# ಮುನ್ನುಡಿ

ಹೊಸ ಒಡಂಬಡಿಕೆಯ ಈ ಅನುವಾದ ಜನಸಾಮಾನ್ಯರ ವಯಸ್ಕರ ಶಿಕ್ಷಣ ಪಡೆದಿರುವವರ ಮತ್ತು ಮಕ್ಕಳ ವಿಶೇಷ ಅಗತ್ಯತೆಗಳನ್ನು ಪೂರೈಸುವುದಕ್ಕಾಗಿ ರಚನೆಗೊಂಡಿದೆ. ಈ ಉದ್ದೇಶದಿಂದಲೇ ಈ ಅನುವಾದ ದೀರ್ಘವಾಕ್ಯಗಳಿಂದ ಮತ್ತು ಕಠಿಣ ಪದಗಳಿಂದ ಹೊರತಾಗಿದೆ. ಅಲ್ಲದೆ ಹೊಸ ಒಡಂಬಡಿಕೆಯನ್ನು ಮೊಟ್ಟಮೊದಲ ಸಲ ಓದುವವರು ಸಹ ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವಷ್ಟು ಸುಲಭ ಶೈಲಿಯಲ್ಲಿದೆ.

''ಸಮರ್ಪಕವಾಗಿ ಮೂಲವಿಷಯವನ್ನು ತಿಳಿಸುವಂಥದ್ದೇ ಸಮರ್ಪಕ ಅನುವಾದ'' ಎಂಬ ಮೂಲಭೂತ ತತ್ವವೇ ಈ ಅನುವಾದಕ್ಕೆ ಮಾರ್ಗದರ್ಶನ ನೀಡಿದೆ. ಹೊಸ ಒಡಂಬಡಿಕೆ ಲೇಖಕರ ಬರಹಗಳು ಅಂದಿನ ಕಾಲದ ಜನರಿಗೆ ಹೇಗೆ ಅರ್ಥಪೂರ್ಣವಾಗಿತ್ತೊ, ಪರಿಣಾಮಕಾರಿಯಾಗಿತ್ತೊ ಮತ್ತು ನೈಜಕರವಾಗಿತ್ತೊ ಅದೇ ರೀತಿ ಈ ಭಾಷಾಂತರ ಈ ಕಾಲದ ಜನರಿಗೆ ಅರ್ಥಭರಿತವಾಗಿರಬೇಕು, ಪರಿಣಾಮಕಾರಿಯಾಗಿರಬೇಕು ಮತ್ತು ನೈಜವಾಗಿರಬೇಕು ಎಂಬುದೇ ಈ ಅನುವಾದಕರ ಉದ್ದೇಶ. ''ವಿಶ್ವಾಸಪೂರ್ಣ ಅನುವಾದ'' ಎಂದರೆ ನಿಘಂಟನ್ನು ನೋಡಿ ಪದಕ್ಕೆ ಪದವನ್ನು ಜೋಡಿಸುವುದಲ್ಲ. ವಿಶ್ವಾಸಪೂರ್ಣ ಅನುವಾದ ಕೇವಲ ಮೂಲಾರ್ಥವನ್ನು ಮಾತ್ರ ಒಳಗೊಂಡಿರದೆ ಸಮಕಾಲೀನವಾಗಿರುತ್ತದೆ, ಆಕರ್ಷಕವಾಗಿರುತ್ತದೆ ಮತ್ತು ಸಾವಿರಾರು ವರ್ಷಗಳ ಹಿಂದೆ ಬೀರಿದಂಥ ಪ್ರಭಾವವನ್ನೇ ಬೀರುತ್ತದೆ.

ಆದ್ದರಿಂದ ಪರಿಣಾಮಕಾರಿಯಾಗಿ ತಿಳಿಸಬೇಕೆಂಬುದೇ ಈ ಅನುವಾದಕರ ಬಹು ಮುಖ್ಯ ಗುರಿಯಾಗಿದೆ. ಹೀಗೆಂದ ಮಾತ್ರಕ್ಕೆ ಅವರು ''ಸಮರ್ಪಕತೆ''ಯನ್ನು ಕಡೆಗಣಿಸಿದ್ದಾರೆ ಎಂದರ್ಥವಲ್ಲ. ಪದಕ್ಕೆ ಪದವನ್ನು ನಿಘಂಟಿನಿಂದ ಜೋಡಿಸುವುದು ''ಸಮರ್ಪಕ ಅನುವಾದವಲ್ಲ'' ಎಂದು ಗ್ರಹಿಸಿಕೊಂಡಿರುವ ಆವರು ಮೂಲಾರ್ಥವನ್ನು ವಿಶ್ವಾಸಪೂರ್ಣವಾಗಿ ಅಭಿವ್ಯಕ್ತಪಡಿಸಿದ್ದಾರೆ.

ಬೈಬಲಿನ ಲೇಖಕರಿಗೆ ''ಉತ್ತಮ ಅಭಿವ್ಯಕ್ತಿ''ಯಲ್ಲೇ ಹೆಚ್ಚಿನ ಆಸಕ್ತಿಯಿತ್ತು. ಹೊಸ ಒಡಂಬಡಿಕೆ ಲೇಖಕರಲ್ಲಂತೂ ಈ ಆಸಕ್ತಿ ಮತ್ತಷ್ಟು ಹೆಚ್ಚಾಗಿ ಕಂಡುಬರುತ್ತದೆ. ಈ ಕನ್ನಡ ಹೊಸ ಒಡಂಬಡಿಕೆಯ ಅನುವಾದಕರು ಇದನ್ನೇ ಒಂದು ಮುಖ್ಯ ಮಾದರಿಯಾಗಿಟ್ಟುಕೊಂಡು ಸರಳವಾಗಿಯೂ ನೈಜವಾಗಿಯೂ ಅಭಿವ್ಯಕ್ತಪಡಿಸಲು ಶ್ರಮಿಸಿದ್ದಾರೆ. ಇವರ ಭಾಷಾಶೈಲಿಯು ಅರ್ಥೈಸಲು ಅಡಚಣೆಯಾಗಿರದೆ, ಪವಿತ್ರ ಗ್ರಂಥಗಳ ಸತ್ಯಗಳನ್ನು ಹೊರತೆಗೆಯುವ ಕೀಲಿಕೈಯಾಗಿದೆ.

ಈ ಅನುವಾದದಲ್ಲಿ ಅರ್ಥಮಾಡಿಕೊಳ್ಳಲು ಸಹಾಯಕವಾಗುವಂತೆ ಕೆಲವು ವಿಶೇಷ ಲಕ್ಷಣಗಳನ್ನು ಸೇರಿಸಲಾಗಿದೆ. ಕಷ್ಟಕರವಾದ ಮತ್ತು ದ್ವಂದ್ವಾರ್ಥವುಳ್ಳ ಪದಗಳಿಗೆ ಸಂಕ್ಷಿಪ್ತ ಟಿಪ್ಪಣಿಗಳನ್ನು ಅಥವಾ ಸಮನಾರ್ಥಗಳನ್ನು ಆವರಣ ಚಿಹ್ನೆಗಳಲ್ಲಿ (*) ಕೊಡಲಾಗಿದೆ. ಹೆಚ್ಚು ವಿವರಣೆ ಅಗತ್ಯವಿರುವ ಪದಗಳಿಗೆ ಮತ್ತು ಪದಗುಚ್ಛಗಳಿಗೆ ನಕ್ಷತ್ರ ಗುರುತು ಕೊಟ್ಟು ಪುಟಗಳ ಕೆಳಭಾಗದಲ್ಲಿ ಟಿಪ್ಪಣಿಗಳನ್ನು ಕೊಡಲಾಗಿದೆ. ಇದಲ್ಲದೆ ಉದ್ಧರಿಸಲ್ಪಟ್ಟ ವಚನಗಳನ್ನು ಮತ್ತು ಸ್ವರೂಪದಲ್ಲಿ ಭಿನ್ನವಾದ ವಚನಗಳನ್ನು ಟಿಪ್ಪಣಿಗಳಲ್ಲಿ ಕೊಡಲಾಗಿದೆ.

# ಪೀಠಿಕೆ

ಬೈಬಲ್ ಎಂಬ ಗ್ರೀಕ್ ಪದಕ್ಕೆ ‘‘ಪುಸ್ತಕಗಳು’’ ಎಂದರ್ಥ. ‘ ಬೈಬಲಿನ ಮೊದಲನೆ ಭಾಗವಾದ ಹಳೆ ಒಡಂಬಡಿಕೆಯು 39 ಪುಸ್ತಕಗಳ ಒಂದು ದೊಡ್ಡ ಸಂಗ್ರಹವಾಗಿದೆ. ಪದ್ಯಗಳ ಸಂಗ್ರಹವಾದ ‘‘ಕೀರ್ತನೆಗಳು’’ ಮೊದಲನೆಯ ಭಾಗಕ್ಕೇ ಸೇರಿದೆ. ‘‘ಒಡಂಬಡಿಕೆ’’ ಎಂದು ಭಾಷಾಂತರಿಸಲ್ಪಟ್ಟಿರುವ ಪದವು ‘‘ಒಪ್ಪಂದ’’ ಅಥವಾ ‘‘ಕರಾರು’’ ಎಂಬ ಅರ್ಥವನ್ನು ಒಳಗೊಂಡಿದೆ. ದೇವರು ತನ್ನ ಜನರನ್ನು ಆಶೀರ್ವದಿಸುವುದಾಗಿ ಮಾಡಿದ ವಾಗ್ದಾನವನ್ನು ಈ ಪದವು ಸೂಚಿಸುತ್ತದೆ. ಮೋಶೆಯ ಕಾಲದಲ್ಲಿ ದೇವರು ಯೆಹೂದ್ಯರೊಡನೆ ಮಾಡಿಕೊಂಡ ಒಪ್ಪಂದಕ್ಕೆ ಸಂಬಂಧಪಟ್ಟ ಪುಸ್ತಕಗಳನ್ನೇ ಹಳೆ ಒಡಂಬಡಿಕೆ ಒಳಗೊಂಡಿದೆ. ‘ಹೊಸ ಒಡಂಬಡಿಕೆ’’ ಎಂದರೆ ಬೈಬಲಿನ ಎರಡನೆ ಭಾಗ. ಹೊಸ ಒಡಂಬಡಿಕೆಯು 27 ಪುಸ್ತಕಗಳ ಒಂದು ಸಂಗ್ರಹವಾಗಿದೆ. ಹಲವಾರು ಶತಮಾನಗಳಿಂದ ಈ ಸಂಗ್ರಹಕ್ಕೆ ‘‘ಹೊಸ ಒಡಂಬಡಿಕೆ’’ ಎಂಬ ಹೆಸರೇ ಪ್ರಚಲಿತದಲ್ಲಿದೆ. ಯೇಸು ಕ್ರಿಸ್ತನನ್ನು ನಂಬುವ ಜನರೊಡನೆ ದೇವರು ಮಾಡಿಕೊಂಡ ಒಪ್ಪಂದಕ್ಕೆ ಸಂಬಂಧಪಟ್ಟ ಪುಸ್ತಕಗಳನ್ನೇ ಹೊಸ ಒಡಂಬಡಿಕೆಯು ಒಳಗೊಂಡಿದೆ.

ದೇವರು ಯೆಹೂದಿಯರ ಜೊತೆ ವ್ಯವಹರಿಸುವಾಗ ನಡೆಸಿದ ಮಹತ್ತರ ಕಾರ್ಯಗಳನ್ನು ಹಳೆ ಒಡಂಬಡಿಕೆಯ ಬರಹಗಳು ವಿವರಿಸುತ್ತವೆ. ಮತ್ತು ಇಡೀ ಪ್ರಪಂಚಕ್ಕೆ ತನ್ನ ಆಶೀರ್ವಾದವನ್ನು ಕೊಡಲು ತನ್ನ ಉದ್ದೇಶಕ್ಕೆ ಅನುಗುಣವಾಗಿ ಆತನು ಆ ಜನರನ್ನು ಹೇಗೆ ಉಪಯೋಗಿಸಿಕೊಂಡನೆಂಬುದನ್ನು ಅವು ತೋರಿಸುತ್ತವೆ. ದೇವರು ತನ್ನ ಯೋಜನೆಗನುಗುಣವಾಗಿ ಕಳುಹಿಸಲಿದ್ದ ರಕ್ಷಕನನ್ನು (ಅಥವಾ ಮೆಸ್ಸೀಯನನ್ನು) ಆ ಬರಹಗಳು ಎದುರುನೋಡುತ್ತಿದ್ದವು. ಹೊಸ ಒಡಂಬಡಿಕೆಯ ಬರಹಗಳು ಹಳೆ ಒಡಂಬಡಿಕೆಯ ಮುಂದಿನ ಪ್ರಕರಣವಾಗಿವೆ. ಅವುಗಳು ಆ ‘‘ರಕ್ಷಕ’’ನ (ಯೇಸು ಕ್ರಿಸ್ತನ) ಆಗಮನವನ್ನು ಮತ್ತು ಇಡೀ ಮಾನವಕೋಟಿಗಾಗಿ ಆತನು ಏಕೆ ಬರುತ್ತಿದ್ದಾನೆಂಬುದನ್ನು ವಿವರಿಸುತ್ತವೆ. ಹೊಸ ಒಡಂಬಡಿಕೆಯನ್ನು ಅರ್ಥಮಾಡಿಕೊಳ್ಳಲು ಹಳೆ ಒಡಂಬಡಿಕೆಯು ಅಗತ್ಯ. ಏಕೆಂದರೆ ಅದು ಅವಶ್ಯವಾದ ಹಿನ್ನೆಲೆಯನ್ನು ಒದಗಿಸುತ್ತದೆ. ಇದಲ್ಲದೆ ಹಳೆ ಒಡಂಬಡಿಕೆಯಲ್ಲಿ ಆರಂಭಗೊಂಡ ರಕ್ಷಣೆಯ ಕಾರ್ಯವನ್ನು ಹೊಸ ಒಡಂಬಡಿಕೆಯು ಪೂರೈಸುತ್ತದೆ.

**ಹಳೆ ಒಡಂಬಡಿಕೆ**

ಅನೇಕ ಲೇಖಕರು ಬರೆದಿರುವ ಮೂವತ್ತೊಂಭತ್ತು ವಿವಿಧ ಪುಸ್ತಕಗಳ ಸಂಗ್ರಹವೇ ಹಳೆ ಒಡಂಬಡಿಕೆ. ಪುರಾತನ ಇಸ್ರೇಲಿನ ಭಾಷೆಯಾದ ಹೀಬ್ರೂವಿನಲ್ಲಿ ಅವುಗಳು ಬರೆಯಲ್ಪಟ್ಟಿವೆ. ಕೆಲವು ಭಾಗಗಳು ಬಾಬಿಲೋನಿನ ಅಧಿಕೃತ ಭಾಷೆಯಾದ ಆ್ಯರಮ್ಯೇಯಿಕ್‌ನಲ್ಲಿ ಬರೆಯಲ್ಪಟ್ಟಿವೆ. ಅಂದರೆ ಮೊದಲನೆ ಪುಸ್ತಕ ರಚನೆಗೊಂಡ ಕಾಲಕ್ಕೂ ಕೊನೆಯ ಪುಸ್ತಕ ರಚನೆಗೊಂಡ ಕಾಲಕ್ಕೂ ಸುಮಾರು 1000 ವರ್ಷ ಅಂತರವಿದೆ. ಈ ಸಂಗ್ರಹದಲ್ಲಿ ಧರ್ಮಶಾಸ್ತ್ರ, ಚರಿತ್ರೆ, ಗದ್ಯ, ಹಾಡು, ಕಾವ್ಯ ಮತ್ತು ಜ್ಞಾನಿಗಳ ಬೋಧನೆಗಳಿಗೆ ಸಂಬಂಧಪಟ್ಟ ಪುಸ್ತಕಗಳಿವೆ.

ಸಾಮಾನ್ಯವಾಗಿ ಹಳೆ ಒಡಂಬಡಿಕೆಯನ್ನು ಹೀಗೆ ಮೂರು ಭಾಗಗಳನ್ನಾಗಿ ವಿಂಗಡಿಸಲಾಗಿದೆ. ಧರ್ಮಶಾಸ್ತ್ರ, ಪ್ರವಾದನಾ ಪುಸ್ತಕಗಳು ಮತ್ತು ಪವಿತ್ರ ಬರಹಗಳು. ಧರ್ಮವಾಸ್ತ್ರವು ಮೋಶೆಯ ಐದು ಪುಸ್ತಕಗಳನ್ನು ಒಳಗೊಂಡಿದೆ. ಮೊದಲನೆ ಪುಸ್ತಕ ‘‘ಆದಿಕಾಂಡ.’’ ನಮಗೆ ತಿಳಿದೇ ಇರುವಂತೆ ಇದು ಲೋಕ ಸೃಷ್ಟಿಯ ಬಗ್ಗೆ, ಪ್ರಥಮ ಸ್ತ್ರೀ ಪುರುಷರ ಬಗ್ಗೆ ಮತ್ತು ಅವರು ದೇವರ ವಿರುದ್ಧವಾಗಿ ಮಾಡಿದ ಮೊದಲನೆ ಪಾಪದ ಬಗ್ಗೆ, ಮಹಾಜಲಪ್ರಳಯದ ಬಗ್ಗೆ ಮತ್ತು ಆ ಜಲಪ್ರಳಯದಲ್ಲಿ ದೇವರು ರಕ್ಷಿಸಿದ ಕುಟುಂಬದ ಬಗ್ಗೆ ತಿಳಿಸುತ್ತದೆ. ದೇವರು ತನ್ನ ವಿಶೇಷವಾದ ಉದ್ದೇಶವನ್ನು ನೆರವೇರಿಸುವುದಕ್ಕಾಗಿ ಆರಿಸಿಕೊಂಡ ಇಸ್ರೇಲರ ರಾಜ್ಯವು ಆರಂಭಗೊಂಡದ್ದನ್ನು ಇದು ತಿಳಿಸುತ್ತದೆ.

**ಅಬ್ರಹಾಮನ ಚರಿತ್ರೆ**

ನಂಬಿಕೆಯಲ್ಲಿ ಮಹಾ ವ್ಯಕ್ತಿಯಾಗಿದ್ದ ಅಬ್ರಹಾಮನೊಂದಿಗೆ ದೇವರು ಒಪ್ಪಂದ ಮಾಡಿಕೊಂಡನು. ಅಬ್ರಹಾಮನನ್ನು ಮಹಾ ಜನಾಂಗದ ತಂದೆಯನ್ನಾಗಿ ಮಾಡುವುದಾಗಿಯೂ ಅವನಿಗೂ ಅವನ ಸಂತತಿಯವರಿಗೂ ಕಾನಾನ್ ದೇಶವನ್ನು ಕೊಡುವುದಾಗಿಯೂ ದೇವರು ಅಬ್ರಹಾಮನಿಗೆ ಆ ಒಪ್ಪಂದದಲ್ಲಿ ವಾಗ್ದಾನ ಮಾಡಿದನು. ತಾನು ಆ ಒಪ್ಪಂದವನ್ನು ಒಪ್ಪಿಕೊಂಡಿರುವುದಾಗಿ ಸೂಚಿಸಲು ಅಬ್ರಹಾಮನು ಸುನ್ನತಿ ಮಾಡಿಸಿಕೊಂಡನು. ಅಂದಿನಿಂದ ದೇವರಿಗೂ ಮತ್ತು ಆತನ ಜನರಿಗೂ ಆದ ಒಪ್ಪಂದಕ್ಕೆ ಸುನ್ನತಿಯೇ ಪುರಾವೆ ಆಯಿತು. ದೇವರು ತಾನು ನೀಡಿದ ವಾಗ್ದಾನಗಳನ್ನು ಹೇಗೆ ನೆರವೇರಿಸುತ್ತಾನೆ ಎಂಬುದು ಅಬ್ರಹಾಮನಿಗೆ ಗೊತ್ತಿರಲಿಲ್ಲ. ಆದರೂ ಅಬ್ರಹಾಮನು ದೇವರಲ್ಲಿ ಭರವಸೆ ಇಟ್ಟನು. ಇದು ದೇವರಿಗೆ ಬಹು ಮೆಚ್ಚಿಕೆಯಾಯಿತು.

ಮೆಸೊಪೊಟೊಮಿಯಾದಲ್ಲಿನ ಹೀಬ್ರೂಗಳ ನಡುವೆ ಅಬ್ರಹಾಮನಿಗೆ ಮನೆಯಿತ್ತು. ಆದರೆ ದೇವರು ಅಲ್ಲಿಂದ ವಾಗ್ದತ್ತ ದೇಶವಾದ ಕಾನಾನಿಗೆ (ಪಾಲೆಸ್ಟೇನಿಗೆ) ಕರೆದೊಯ್ದನು. ವೃದ್ಧಾಪ್ಯದಲ್ಲಿ ಅಬ್ರಹಾಮನಿಗೆ ಇಸಾಕನೆಂಬ ಮಗ ಹುಟ್ಟಿದನು. ಇಸಾಕನಿಗೆ ಯಾಕೋಬ ಎಂಬ ಮಗ ಜನಿಸಿದನು. (ಯಾಕೋಬನಿಗೆ ''ಇಸ್ರೇಲ'' ಎಂತಲೂ ಹೆಸರಿದೆ). ಯಾಕೋಬನಿಗೆ ಒಟ್ಟು ಹನ್ನೆರಡು ಮಂದಿ ಗಂಡು ಮಕ್ಕಳು ಮತ್ತು ಒಬ್ಬ ಹೆಣ್ಣು ಮಗಳು ಇದ್ದರು. ಈ ಕುಟುಂಬವೇ ಇಸ್ರೇಲ್ ಜನಾಂಗವಾಯಿತು. ಆದರೂ ಅದು ತನ್ನ ಕುಲದ ಮೂಲವನ್ನು ಮರೆಯಲಿಲ್ಲ. ಅದು ಯಾವಾಗಲೂ ತನ್ನನ್ನು ಇಸ್ರೇಲಿನ ಹನ್ನೆರಡು ಕುಲಗಳು ಎಂಬುದಾಗಿಯೇ ಸೂಚಿಸಿಕೊಳ್ಳುತ್ತಿತ್ತು. ಹೀಗೆ ಯಾಕೋಬನ ಹನ್ನೆರಡು ಮಂದಿ ಗಂಡು ಮಕ್ಕಳು ಇಸ್ರೇಲಿನ ವಂಶಜರೆಂಬುದಾಗಿ ಕರೆಯಲ್ಪಟ್ಟರು. ಅವರು ಯಾರೆಂದರೆ: ರೂಬೇನ್, ಸಿಮೆಯೋನ್, ಲೇವಿ, ಯೆಹೂದ, ದಾನ್, ನಫ್ತಾಲಿ, ಗಾದ್, ಅಶೇರ್, ಇಸ್ಸಾಕಾರ್, ಜೆಬುಲೋನ್, ಯೋಸೇಫ ಮತ್ತು ಬೆನ್ಯಾಮಿನ್. ಪೂರ್ವಿಕರಲ್ಲಿ ಪ್ರಮುಖರಾದ ಮೂವರು ಯಾರೆಂದರೆ: ಅಬ್ರಹಾಮ, ಇಸಾಕ ಮತ್ತು ಯಾಕೋಬ. ಇವರನ್ನು ಇಸ್ರೇಲಿನ ''ಪಿತೃಗಳು'' ಎಂದು ಕರೆಯಲಾಯಿತು.

ಅಬ್ರಹಾಮನು ಮತ್ತೊಂದು ರೀತಿಯ ''ಪಿತೃ''ವೂ ಆಗಿದ್ದನು. ಪ್ರಾಚೀನ ಇಸ್ರೇಲಿನಲ್ಲಿ ಅನೇಕ ಸಲ ದೇವರು ಕೆಲವರನ್ನು ತನ್ನ ಪ್ರತಿನಿಧಿಗಳನ್ನಾಗಿ ಆರಿಸಿಕೊಂಡನು. ಈ ಪ್ರತಿನಿಧಿಗಳು ಅಥವಾ ಪ್ರವಾದಿಗಳು ಜನರಿಗೆ ದೇವರ ಸಂದೇಶವನ್ನು ಕೊಡುತ್ತಿದ್ದರು. ಪ್ರವಾದಿಗಳ ಮೂಲಕವಾಗಿ ದೇವರು ಇಸ್ರೇಲ್ ಜನರಿಗೆ ಎಚ್ಚರಿಕೆಗಳನ್ನು, ನಿಯಮಗಳನ್ನು, ಉಪದೇಶಗಳನ್ನು, ಹಿಂದಿನ ಅನುಭವಗಳಿಂದ ರೂಪಿಸಿದ ಪಾಠಗಳನ್ನು ಮತ್ತು ಭವಿಷ್ಯದಲ್ಲಿ ನಡೆಯಬಹುದಾದ ಘಟನೆಗಳನ್ನಾಧರಿಸಿದ ಪಾಠಗಳನ್ನು ಕೊಟ್ಟನು. ಹೀಬ್ರೂ ಭಾಷೆಯವನಾಗಿದ್ದ ಅಬ್ರಹಾಮನೇ ಮೊದಲನೆ ಪ್ರವಾದಿ ಎಂದು ಪವಿತ್ರ ಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ.

**ಇಸ್ರೇಲರಿಗೆ ದಾಸ್ಯದಿಂದ ಬಿಡುಗಡೆ**

ಯಾಕೋಬನ ಕುಟುಂಬವು ಬೆಳೆದು 70 ಮಂದಿ ನೇರ ವಂಶಜರನ್ನು ಪಡೆದುಕೊಂಡಿತು. ಅವನ ಮಕ್ಕಳಲ್ಲಿ ಒಬ್ಬನಾದ ಯೋಸೇಫನು ಈಜಿಪ್ಟಿನಲ್ಲಿ ಉನ್ನತ ಅಧಿಕಾರಿಯಾದ. ಆಗಿನ ಕಾಲ ಕಷ್ಟಕರವಾಗಿದ್ದರಿಂದ ಯಾಕೋಬ ಮತ್ತು ಅವನ ಕುಟುಂಬದವರು ಈಜಿಪ್ಟಿಗೆ ಹೋದರು. ಈಜಿಪ್ಟಿನಲ್ಲಿ ಆಹಾರವು ಯಥೇಚ್ಛವಾಗಿ ದೊರೆಯುತ್ತಿದ್ದ ಕಾರಣ ಜೀವನವು ಅಲ್ಲಿ ಸುಖಕರವಾಗಿತ್ತು. ಹೀಬ್ರೂ ಭಾಷೆಯನ್ನಾಡುತ್ತಿದ್ದ ಈ ಕುಲವು ಚಿಕ್ಕ ಜನಾಂಗವಾಯಿತು. ಫರೋಹನು (ಈಜಿಪ್ಟಿನ ರಾಜ) ಇವರನ್ನು ಗುಲಾಮರನ್ನಾಗಿ ಮಾಡಿಕೊಂಡನು. ಕಟ್ಟಕಡೆಗೆ, ಸುಮಾರು ನಾನೂರು ವರ್ಷಗಳ ನಂತರ, ಪ್ರವಾದಿಯಾದ ಮೋಶೆಯ ಮೂಲಕ ದೇವರು ಇಸ್ರೇಲರನ್ನು ಹೇಗೆ ಈಜಿಪ್ಟಿನ ಗುಲಾಮಗಿರಿಯಿಂದ ಬಿಡಿಸಿ ಪಾಲೆಸ್ಟೇನಿಗೆ ಕರೆದೊಯ್ದನೆಂಬುದನ್ನು ವಿಮೋಚನಕಾಂಡ ಎಂಬ ಪುಸ್ತಕವು ತಿಳಿಸುತ್ತದೆ. ಬಿಡುಗಡೆಗಾಗಿ ಕೊಟ್ಟ ಬೆಲೆ ದೊಡ್ಡದು. ಆದರೆ ಅದನ್ನು ಈಜಿಪ್ಟಿನವರು ಕೊಡಬೇಕಾಯಿತು. ಕೊನೆಗೆ ಫರೋಹ ಇಸ್ರೇಲರನ್ನು ಬಿಡುಗಡೆ ಮಾಡಲು ಒಪ್ಪಿಕೊಳ್ಳುವುದಕ್ಕಿಂತ ಮುಂಚೆ ಅವನೂ ಈಜಿಪ್ಟಿನ ಎಲ್ಲಾ ಕಟುಂಬಗಳವರೂ ತಮ್ಮ ಚೊಚ್ಚಲು ಗಂಡು ಮಕ್ಕಳನ್ನು ಕಳೆದುಕೊಳ್ಳಬೇಕಾಯಿತು. ಇಸ್ರೇಲರ ಬಿಡುಗಡೆಗಾಗಿ ಚೊಚ್ಚಲ ಮಕ್ಕಳು ಸಾಯಬೇಕಾಯಿತು. ಈ ಘಟನೆಯನ್ನು ಇಸ್ರೇಲಿನ ಜನರು ತಮ್ಮ ಆರಾಧನೆ, ಯಜ್ಞಾದಿಗಳಲ್ಲಿ ಸ್ಮರಿಸಿಕೊಳ್ಳುತ್ತಿದ್ದರು.

ಸ್ವಾತಂತ್ರ್ಯ ಹೊಂದಲು ಇಸ್ರೇಲಿನ ಜನ ಸಿದ್ಧರಾಗಿದ್ದರು. ಈಜಿಪ್ಟಿನಿಂದ ತಪ್ಪಿಸಿಕೊಳ್ಳಲೆಂದು ಅವರು ಉಡುಪು ಧರಿಸಿದ್ದರು. ಪ್ರತಿ ಕುಟುಂಬದವರು ಒಂದು ಕುರಿಯನ್ನು ಕೊಯ್ದು ಅದರ ಮಾಂಸವನ್ನು ಬೆಂಕಿಯಿಂದ ಬೇಯಿಸಿದರು.

ದೇವರಿಗೆ ವಿಶೇಷ ಚಿಹ್ನೆಯಾಗಿರಲೆಂದು ಅದರ ರಕ್ತವನ್ನು ತಮ್ಮ ಹೊಸ್ತಿಲ ಮೇಲೆ ಚೆಲ್ಲಿದರು. ಹುಳಿಯಿಲ್ಲದ ರೊಟ್ಟಿಯನ್ನು ಅವಸರದಲ್ಲಿ ತಯಾರಿಸಿ ಊಟ ಮಾಡಿದರು. ಅಂದು ರಾತ್ರಿ ಪ್ರಭುವಿನ ದೂತನು ಆ ದೇಶದ ಮೇಲೆಲ್ಲಾ ಸಂಚರಿಸಿದನು. ಯಾವ ಮನೆಯ ಹೊಸ್ತಿಲಲ್ಲಿ ಕುರಿಯ ರಕ್ತವಿರಲಿಲ್ಲವೊ ಆ ಕುಟುಂಬದ ಚೊಚ್ಚಲು ಮಗನು ಸತ್ತುಹೋದನು. ಇಸ್ರೇಲರಿಗೆ ಬಿಡುಗಡೆ ಆಯಿತು. ಆದರೆ ಗುಲಾಮರು ಈಜಿಪ್ಟಿನಿಂದ ಹೊರಟುಹೋಗುತ್ತಿರುವಾಗ ಫರೋಹ ತನ್ನ ಮನಸ್ಸನ್ನು ಬದಲಾಯಿಸಿದನು. ಇಸ್ರೇಲ್ ಜನರನ್ನು ಬಂಧಿಸಿ ಹಿಂದಕ್ಕೆ ಎಳೆದುಕೊಂಡು ಬರಲು ತನ್ನ ಸೈನ್ಯವನ್ನು ಕಳುಹಿಸಿದನು. ಆದರೆ ದೇವರು ತನ್ನ ಜನರನ್ನು ರಕ್ಷಿಸಿದನು. ದೇವರು ಕೆಂಪು ಸಮುದ್ರವನ್ನು ಎರಡು ಭಾಗ ಮಾಡಿ ಅವರನ್ನು ಸಮುದ್ರದ ಆಚೆ ದಡಕ್ಕೆ ನಡೆಸಿ ಸ್ವತಂತ್ರರನ್ನಾಗಿ ಮಾಡಿದನು ಮತ್ತು ಬೆನ್ನಟ್ಟಿ ಬರುತ್ತಿದ್ದ ಈಜಿಪ್ಟಿನ ಸೈನ್ಯವನ್ನು ನಾಶಗೊಳಿಸಿದನು. ಬಳಿಕ, ಅರೇಬಿಯಾದ ಪರ್ಯಾಯ ದ್ವೀಪದ ಸಿನಾಯ್ ಮರುಭೂಮಿಯಲ್ಲಿನ ಒಂದು ಪರ್ವತದ ಬಳಿ ದೇವರು ಆ ಜನರೊಂದಿಗೆ ವಿಶೇಷವಾದ ಒಪ್ಪಂದವನ್ನು ಮಾಡಿಕೊಂಡನು.

**ಮೋಶೆಯ ಧರ್ಮಶಾಸ್ತ್ರ**

ದೇವರು ಇಸ್ರೇಲರನ್ನು ರಕ್ಷಿಸಿದ್ದು ಮತ್ತು ಸಿನಾಯ್ ಬೆಟ್ಟದ ಬಳಿ ಒಪ್ಪಂದ ಮಾಡಿಕೊಂಡದ್ದು ಈ ಜನಾಂಗವನ್ನು ಇತರ ಎಲ್ಲರಿಂದ ಪ್ರತ್ಯೇಕಗೊಳಿಸಿತು. ಈ ಒಪ್ಪಂದದ ಮೂಲಕ ಇಸ್ರೇಲರು ವಾಗ್ದಾನಗಳನ್ನು ಮತ್ತು ನಿಯಮಗಳನ್ನು ಪಡೆದುಕೊಂಡರು. ''ದಶಾಜ್ಞೆಗಳು'' ಎಂಬ ಹೆಸರಿನಿಂದ ಪ್ರಸಿದ್ಧವಾಗಿರುವ ಈ ಒಪ್ಪಂದದ ಒಂದು ಭಾಗವನ್ನು ದೇವರೇ ಸ್ವತಃ ಎರಡು ಕಲ್ಲಿನ ಫಲಕದ ಮೇಲೆ ಬರೆದು ತನ್ನ ಜನರಿಗೆ ಕೊಟ್ಟನು. ಇಸ್ರೇಲಿನ ಜನರು ಯಾವ ರೀತಿ ಬದುಕಬೇಕು ಎಂದು ದೇವರು ನಿರೀಕ್ಷಿಸಿದ್ದನೋ ಆ ಮೂಲ ತತ್ವಗಳನ್ನು ಈ ಆಜ್ಞೆಗಳು ಒಳಗೊಂಡಿದ್ದವು. ಇಸ್ರೇಲಿನ ಒಬ್ಬ ಪ್ರಜೆ ತನ್ನ ದೇವರು, ಕುಟುಂಬ ಮತ್ತು ಸ್ವದೇಶದವರ ಬಗ್ಗೆ ಹೇಗೆ ನಡೆದುಕೊಳ್ಳಬೇಕೆಂಬುದನ್ನು ಅವುಗಳಲ್ಲಿ ಹೇಳಿದೆ.

ದೇವರು ಸಿನಾಯ್ ಪರ್ವತದ ಬಳಿ ಕೊಟ್ಟ ದಶಾಜ್ಞೆಗಳು ಮತ್ತು ಇನ್ನುಳಿದ ನಿಯಮಗಳು ಮತ್ತು ಬೋಧನೆಗಳು ''ಮೋಶೆಯ ಧರ್ಮಶಾಸ್ತ್ರ'' ಅಥವಾ ''ಧರ್ಮಶಾಸ್ತ್ರ'' ಎಂಬ ಹೆಸರಿನಿಂದ ಪ್ರಸಿದ್ಧವಾಗಿವೆ. ಮೊದಲ ಐದು ಪುಸ್ತಕಗಳಿಗೆ ಅನ್ವಯವಾಗುವಂತೆ ಅನೇಕ ಸಲ ಈ ಹೆಸುರುಗಳನ್ನು ಬಳಸಲಾಗುತ್ತಿದೆ. ಅಲ್ಲದೆ ಇಡೀ ಹಳೆ ಒಡಂಬಡಿಕೆಗೆ ಅನ್ವಯವಾಗುವಂತೆಯೂ ಪದೇ ಪದೇ ಬಳಸಲಾಗುತ್ತಿದೆ.

ದಶಾಜ್ಞೆಗಳು, ಇತರ ನಡತೆಗೆ ಸಂಬಂಧಪಟ್ಟ ಕಟ್ಟಳೆಗಳು, ಯಾಜಕರು, ಯಜ್ಞಗಳು, ಆರಾಧನೆ ಮತ್ತು ಪವಿತ್ರ ದಿನ ಇವುಗಳ ಬಗ್ಗೆ ಕೆಲವು ನಿಯಮಗಳನ್ನು ಮೋಶೆಯ ಧರ್ಮಶಾಸ್ತ್ರ ಒಳಗೊಂಡಿದೆ. ಈ ನಿಯಮಗಳು ಯಾಜಕಕಾಂಡ ಎಂಬ ಪುಸ್ತಕದಲ್ಲಿ ಕಾಣ ಬರುತ್ತವೆ. ಮೋಶೆಯ ಧರ್ಮಶಾಸ್ತ್ರದ ಪ್ರಕಾರ ಎಲ್ಲಾ ಯಾಜಕರು ಮತ್ತು ಅವರ ಸಹಾಯಕರು ಲೇವಿ ಕುಲಕ್ಕೆ ಸೇರಿದವರಾಗಿದ್ದರು. ಈ ಸಹಾಯಕರನ್ನು ''ಲೇವಿಯರು'' ಎಂದು ಕರೆಯುತ್ತಿದ್ದರು. ಅತ್ಯಂತ ಪ್ರಮುಖನಾದ ಯಾಜಕನನ್ನು ''ಮಹಾಯಾಜಕ'' ಎಂದು ಕರೆಯುತ್ತಿದ್ದರು.

ಇಸ್ರೇಲಿನ ಜನರು ದೇವರನ್ನು ಆರಾಧಿಸಲು ಹೋಗುತ್ತಿದ್ದ ಸ್ಥಳಕ್ಕೆ ''ದೇವದರ್ಶನ ಗುಡಾರ'' ಎಂದು ಹೆಸರಿತ್ತು. ಈ ಗುಡಾರವನ್ನು ಕಟ್ಟತಕ್ಕ ಕ್ರಮದ ಬಗ್ಗೆ ಧರ್ಮಶಾಸ್ತ್ರದಲ್ಲಿ ವಿವರಿಸಲಾಗಿದೆ. ಅವರು ಆರಾಧನೆಗಾಗಿ ಉಪಯೋಗಿಸುತ್ತಿದ್ದ ವಸ್ತುಗಳನ್ನು ತಯಾರಿಸತಕ್ಕ ಕ್ರಮವನ್ನು ಸಹ ಅದು ಒಳಗೊಂಡಿದೆ. ಮುಂದೆ ಜೆರುಸಲೇಮಿನ ಸಿಯೋನ್ ಪರ್ವತದ ಮೇಲೆ ಪವಿತ್ರ ದೇವಾಲಯವನ್ನು ಕಟ್ಟಲು ಇದು ಇಸ್ರೇಲರನ್ನು ಸಿದ್ಧಪಡಿಸಿತು. ಜನರು ಒಬ್ಬರಿಗೊಬ್ಬರಿಗೆ ಮತ್ತು ದೇವರಿಗೆ ವಿರುದ್ಧವಾಗಿ ಮಾಡುವ ಪಾಪಗಳನ್ನು ಯಜ್ಞ ಮತ್ತು ಆರಾಧನೆಗಳ ನಿಯಮಗಳು ತೋರಿಸಿಕೊಟ್ಟವು. ಇದಲ್ಲದೆ ಜನರು ಒಬ್ಬರಿಗೊಬ್ಬರು ಅನ್ಯೋನ್ಯವಾಗಿರಲು ಮತ್ತು ದೇವರೊಂದಿಗೆ ಅನ್ಯೋನ್ಯವಾಗಿರಲು ಅಗತ್ಯವಾದ ಮಾರ್ಗವನ್ನು ಸಹ ತೋರಿಸಿಕೊಟ್ಟವು. ಇಡೀ ಮಾನವಕೋಟಿಗಾಗಿ ದೇವರು ಕೊಡಲು ಸಿದ್ಧಪಡಿಸುತ್ತಿದ್ದ ಯಜ್ಞವೊಂದನ್ನು ಚೆನ್ನಾಗಿ ಅರಿತುಕೊಳ್ಳಲು ಈ ಯಜ್ಞಗಳು ಅನುವು ಮಾಡಿಕೊಟ್ಟವು.

ಅನೇಕ ಪವಿತ್ರ ದಿನಗಳನ್ನು ಅಥವಾ ಹಬ್ಬಗಳನ್ನು ಆಚರಿಸಲು ಅಗತ್ಯವಾದ ನಿಯಮಗಳನ್ನು ಧರ್ಮಶಾಸ್ತ್ರ ಒಳಗೊಂಡಿದೆ. ಪ್ರತಿಯೊಂದು ಹಬ್ಬ ತನ್ನದೇ ಆದ ವಿಶೇಷ ಅರ್ಥವನ್ನು ಹೊಂದಿದೆ. ಕೆಲವು ಹಬ್ಬಗಳು ವರ್ಷದ ವಿಶೇಷ ಕಾಲಗಳನ್ನು ಆಚರಿಸುವ ಸಂಭ್ರಮದ ದಿನಗಳಾಗಿದ್ದವು. ಅವು ಯಾವುವೆಂದರೆ : ಪ್ರಥಮ ಫಲದ ಸುಗ್ಗಿಹಬ್ಬಗಳು, ಪಂಚಶತ್ತಮ

ಹಬ್ಬ ಮತ್ತು ಪರ್ಣಶಾಲೆಗಳ ಹಬ್ಬ. ದೇವರು ತನ್ನ ಜನರಿಗಾಗಿ ಮಾಡಿದ ಅದ್ಭುತಕಾರ್ಯಗಳ ನೆನಪಿಗಾಗಿ ಕೆಲವು ಹಬ್ಬಗಳನ್ನು ಆಚರಿಸಲಾಗುತ್ತಿತ್ತು. ಪಸ್ಕಹಬ್ಬವು ಅಂಥ ಹಬ್ಬಗಳಲ್ಲಿ ಒಂದಾಗಿತ್ತು. ಪ್ರತಿಯೊಂದು ಕುಟುಂಬವು ತಾನು ಈಜಿಪ್ಟಿನಿಂದ ತಪ್ಪಿಸಿಕೊಂಡ ಘಟನೆಯನ್ನು ಪುನಃ ನೆನಪುಮಾಡಿಕೊಳ್ಳುತ್ತಿತ್ತು. ಜನರು ದೇವರ ಸ್ತುತಿಗೀತೆಗಳನ್ನು ಹಾಡುತ್ತಿದ್ದರು. ಒಂದು ಕುರಿಮರಿಯನ್ನು ಕೊಯ್ದು ಅಡಿಗೆ ತಯಾರು ಮಾಡುತ್ತಿದ್ದರು. ನೋವು ಮತ್ತು ದುಃಖದ ಬಾಳಿನಿಂದ ತಮ್ಮನ್ನು ಕಾಪಾಡಲು ದೇವರು ಮಾಡಿದ ಕಾರ್ಯಗಳನ್ನು ದ್ರಾಕ್ಷಾರಸದ ಪ್ರತಿ ಲೋಟವೂ ಊಟದ ಪ್ರತಿಯೊಂದು ತುತ್ತೂ ಜನಗಳಿಗೆ ನೆನಪು ತಂದುಕೊಡುತ್ತಿದ್ದವು. ಇತರ ಹಬ್ಬಗಳು ಬಹಳ ಗಂಭೀರವಾದ ಹಬ್ಬಗಳಾಗಿದ್ದವು. ಪ್ರತಿ ವರ್ಷ ಜನರು ತಾವು ಇತರರಿಗೆ ಮತ್ತು ದೇವರಿಗೆ ವಿರುದ್ಧವಾಗಿ ಮಾಡಿದ ಕೆಟ್ಟಕಾರ್ಯಗಳನ್ನು ದೋಷಪರಿಹಾರಕ ದಿನದಂದು ಜ್ಞಾಪಿಸಿಕೊಳ್ಳಬೇಕಾಗಿತ್ತು. ಅದು ದುಃಖದ ದಿನವಾದ್ದರಿಂದ ಜನರು ಊಟ ಮಾಡುತ್ತಿರಲಿಲ್ಲ. ಅಂದು ಅವರ ಪಾಪಗಳನ್ನು ಮುಚ್ಚಲು ಅಥವಾ ಪ್ರಾಯಶ್ಚಿತ್ತ ನೀಡಲು ಮಹಾಯಾಜಕನು ವಿಶೇಷವಾದ ಯಜ್ಞಗಳನ್ನು ಅರ್ಪಿಸುತ್ತಿದ್ದನು.

ದೇವರ ಮತ್ತು ಇಸ್ರೇಲರ ನಡುವೆ ಆದ ಒಪ್ಪಂದವು ಹಳೆ ಒಡಂಬಡಿಕೆಯ ಲೇಖಕರಿಗೆ ಬಹಳ ಮುಖ್ಯವಾದ ವಿಷಯವಾಗಿತ್ತು. ಇಸ್ರೇಲ್ ರಾಷ್ಟ್ರವು ಮತ್ತು ಇಸ್ರೇಲಿನ ಪ್ರತಿಯೊಬ್ಬ ಪ್ರಜೆಯು ದೇವರೊಂದಿಗೆ ಮಾಡಿಕೊಂಡಿದ್ದ ವಿಶೇಷ ಒಪ್ಪಂದವನ್ನೇ ಬಹುಮಟ್ಟಿಗೆ ಪ್ರವಾದಿಗಳ ಎಲ್ಲಾ ಪುಸ್ತಕಗಳು ಮತ್ತು ಪವಿತ್ರ ಬರಹಗಳು ಆಧರಿಸಿವೆ. ಅವರು ಅದನ್ನು ''ಪ್ರಭುವಿನೊಂದಿಗೆ ಒಪ್ಪಂದ'' ಎಂತಲೂ, ಅಥವಾ ಸರಳವಾಗಿ ''ಒಪ್ಪಂದ'' ಎಂತಲೂ ಕರೆದರು. ಅವರ ಚರಿತ್ರೆ ಪುಸ್ತಕಗಳು ಘಟನೆಗಳನ್ನು ಒಪ್ಪಂದದ ಬೆಳಕಿನಲ್ಲಿ ಅರ್ಥೈಸುತ್ತವೆ. ಒಬ್ಬ ವ್ಯಕ್ತಿಯೇ ಆಗಲಿ ಅಥವಾ ರಾಷ್ಟ್ರವೇ ಆಗಲಿ ದೇವರಿಗೆ ಮತ್ತು ಒಪ್ಪಂದಕ್ಕೆ ವಿಧೇಯರಾಗಿದ್ದಾಗ ಮಾತ್ರ ಅವರಿಗೆ ದೇವರಿಂದ ಆಶೀರ್ವಾದ ದೊರೆಯಿತು. ಜನರು ಒಪ್ಪಂದವನ್ನು ಉಲ್ಲಂಘಿಸಿದಾಗ ಅವರು ದೇವರಿಂದ ಶಿಕ್ಷೆ ಹೊಂದಬೇಕಾಗಿತ್ತು. ಜನರು ತನ್ನೊಂದಿಗೆ ಮಾಡಿಕೊಂಡಿದ್ದ ಒಪ್ಪಂದವನ್ನು ನೆನಪು ಮಾಡುವುದಕ್ಕಾಗಿ ದೇವರು ಪ್ರವಾದಿಗಳನ್ನು ಅವರ ಬಳಿಗೆ ಕಳುಹಿಸಿದನು. ದೇವರು ತನಗೆ ವಿಧೇಯರಾಗಿದ್ದ ಜನರಿಗೋಸ್ಕರ ಮಾಡಿದ ಅದ್ಭುತಕಾರ್ಯಗಳನ್ನು ಇಸ್ರೇಲಿನ ಕವಿಗಳು ಹಾಡಿದರು ಮತ್ತು ದೇವರಿಗೆ ಅವಿಧೇಯರಾಗಿದ್ದವರಿಗೆ ಉಂಟಾದ ನೋವು ಮತ್ತು ಶಿಕ್ಷೆಗಳನ್ನು ನೆನಸಿಕೊಂಡು ಗೋಳಾಡಿದರು. ಈ ಲೇಖಕರ ತಪ್ಪು-ಒಪ್ಪುಗಳ ಪರಿಕಲ್ಪನೆಯು ಒಪ್ಪಂದದ ಕುರಿತಾದ ಉಪದೇಶವನ್ನು ಆಧರಿಸಿತ್ತು. ಮುಗ್ಧ ಜನರು ಕಷ್ಟಕ್ಕೊಳಗಾದಾಗ ಅದಕ್ಕೆ ಕಾರಣವನ್ನು ತಿಳಿದುಕೊಳ್ಳಲು ಕವಿಗಳು ಶ್ರಮಿಸಿದರು.

**ಇಸ್ರೇಲ್ ಸಾಮ್ರಾಜ್ಯ**

ಪುರಾತನ ಇಸ್ರೇಲಿನ ಚರಿತ್ರೆಯು ಚಕ್ರಾಕಾರದಲ್ಲಿದೆ ಎನ್ನಬಹುದು. ಹೇಗಂದರೆ, ಜನರು ದೇವರನ್ನು ತಿರಸ್ಕರಿಸುತ್ತಾರೆ, ದೇವರು ಜನರನ್ನು ರಕ್ಷಿಸುತ್ತಾನೆ, ಜನರು ದೇವರ ಕಡೆಗೆ ಮತ್ತೆ ತಿರುಗಿಕೊಳ್ಳುತ್ತಾರೆ, ಆ ಬಳಿಕ ಜನರು ಮತ್ತೆ ದೇವರನ್ನು ತಿರಸ್ಕರಿಸುತ್ತಾರೆ. ಜನರು ದೇವರ ಒಪ್ಪಂದವನ್ನು ಒಪ್ಪಿಕೊಂಡ ಕೂಡಲೇ ಈ ಚಕ್ರಾಕಾರದ ಚರಿತ್ರೆಯು ಆರಂಭವಾಯಿತು ಮತ್ತು ಅದು ಪದೇ ಪದೇ ಪುನರಾವರ್ತಿಯಾಯಿತು. ದೇವರನ್ನು ಅನುಸರಿಸುವುದಾಗಿ ಜನರು ಸಿನಾಯ್ ಪರ್ವತದ ಬಳಿ ಒಪ್ಪಿಕೊಂಡರು. ಆದರೆ ಆ ಬಳಿಕ ಅವರು ದಂಗೆ ಎದ್ದರು. ಈ ಕಾರಣದಿಂದಾಗಿ ಅವರು ಅರಣ್ಯದಲ್ಲಿ 40 ವರ್ಷ ಅಲೆಯಬೇಕಾಯಿತು. ಕಟ್ಟಕಡೆಗೆ, ಮೋಶೆಗೆ ಸಹಾಯಕನಾಗಿದ್ದ ಯೆಹೋಶುವನು ಜನರನ್ನು ವಾಗ್ದತ್ತ ದೇಶಕ್ಕೆ ನಡೆಸಿದನು. ಅನೇಕ ಅರಸರುಗಳನ್ನು ಸೋಲಿಸಿ ಕಾನಾನ್ ದೇಶವನ್ನು ವಶಪಡಿಸಿಕೊಳ್ಳಲಾಯಿತು. ಯೆಹೋಶುವನು ಕಾನಾನ್ ದೇಶವನ್ನು ಇಸ್ರೇಲರಿಗೆ ಹಂಚಿಕೊಟ್ಟನು. ಇದಾದ ನಂತರ ''ನ್ಯಾಯಾಧೀಶರು'' ಎನಿಸಿಕೊಂಡಿದ್ದ ಸ್ಥಳೀಯ ನಾಯಕರೇ ಕೆಲವು ಶತಮಾನಗಳವರೆಗೆ ರಾಜ್ಯಭಾರ ಮಾಡಿದರು.

ಕಾಲಕ್ರಮೇಣ, ಜನರು ಒಬ್ಬ ರಾಜನನ್ನು ಅಪೇಕ್ಷಿಸಿದರು. ಸೌಲನು ಅವರ ಮೊದಲನೆ ರಾಜನಾದನು. ಸೌಲನು ದೇವರಿಗೆ ವಿಧೇಯನಾಗಲಿಲ್ಲ. ಆದ್ದರಿಂದ ದೇವರು ಕುರುಬನಾಗಿದ್ದ ''ದಾವೀದ'' ನೆಂಬ ಬಾಲಕನನ್ನು ಹೊಸ ರಾಜನನ್ನಾಗಿ ಆರಿಸಿಕೊಂಡನು. ಪ್ರವಾದಿಯಾದ ಸಮುವೇಲನು ಅವನ ತಲೆಗೆ ಎಣ್ಣೆಯನ್ನು ಹಚ್ಚಿ ಅವನನ್ನು ಇಸ್ರೇಲ್ ರಾಜನನ್ನಾಗಿ ಅಭಿಷೇಕಿಸಿದನು. ಇನ್ನು ಮುಂದಿನ ಇಸ್ರೇಲ್ ರಾಜರುಗಳೆಲ್ಲ ಯೆಹೂದ ಕುಲಕ್ಕೆ ಸೇರಿದ ದಾವೀದನ ಸಂತತಿಯವರಾಗಿರುತ್ತಾರೆಂದು ದೇವರು ದಾವೀದನಿಗೆ ವಾಗ್ದಾನ ಮಾಡಿದನು. ದಾವೀದನು ಜೆರುಸಲೇಮ್ ಪಟ್ಟಣವನ್ನು ಗೆದ್ದುಕೊಂಡು ಅದನ್ನು ರಾಜಧಾನಿಯನ್ನಾಗಿಯೂ ಮುಂದೆ ದೇವಾಲಯವನ್ನು ಕಟ್ಟಲು ಯೋಗ್ಯ

ಸ್ಥಳವನ್ನಾಗಿಯೂ ಮಾಡಿದನು. ದೇವಾಲಯದಲ್ಲಿ ಆರಾಧನೆ ನಡೆಸಲು ಅವನು ಯಾಜಕರನ್ನು, ಪ್ರವಾದಿಗಳನ್ನು, ಗೀತೆ ರಚನಕಾರರನ್ನು ವಾದ್ಯಗಾರರನ್ನು ಮತ್ತು ಗಾಯಕರನ್ನು ವ್ಯವಸ್ಥೆ ಮಾಡಿದನು. ಅಲ್ಲದೆ ಸ್ವತಃ ತಾನೇ ಅನೇಕ ಹಾಡುಗಳನ್ನು (ಅಥವಾ ಕೀರ್ತನೆಗಳನ್ನು) ರಚಿಸಿದನು. ಆದರೂ ದೇವರು ತನ್ನ ಆಲಯವನ್ನು ಕಟ್ಟಲು ಅವನಿಗೆ ಅನುಮತಿ ನೀಡಲಿಲ್ಲ.

ದಾವೀದನು ವೃದ್ಧನಾಗಿ ಸಾಯುವ ಗಳಿಗೆಯಲ್ಲಿದ್ದಾಗ ತನ್ನ ಮಗನಾದ ಸೊಲೊಮೋನನನ್ನು ಇಸ್ರೇಲಿನ ರಾಜನನ್ನಾಗಿ ಮಾಡಿದನು. ದೇವರನ್ನು ಯಾವಾಗಲೂ ಅನುಸರಿಸುತ್ತಾ ಒಪ್ಪಂದಕ್ಕೆ ವಿಧೇಯನಾಗಿರಬೇಕೆಂದು ದಾವೀದನು ತನ್ನ ಮಗನಿಗೆ ಎಚ್ಚರಿಕೆ ನೀಡಿದನು. ರಾಜನಾದ ಸೊಲೊಮೋನನು ದೇವಾಲಯವನ್ನು ಕಟ್ಟಿದನು. ಅಲ್ಲದೆ ರಾಜ್ಯವನ್ನು ವಿಸ್ತರಿಸಿದನು. ಈ ಕಾಲದಲ್ಲಿ ಇಸ್ರೇಲ್ ತನ್ನ ವೈಭವದ ಶಿಖರವನ್ನು ತಲುಪಿತ್ತು. ಸೊಲೊಮೋನನು ಪ್ರಸಿದ್ಧನಾದನು. ಇಸ್ರೇಲ್ ಬಲಿಷ್ಠವಾಯಿತು.

**ಯೆಹೂದ ಮತ್ತು ಇಸ್ರೇಲ್ – ವಿಭಜನೆಗೊಂಡ ಸಾಮ್ರಾಜ್ಯ**

ಸೊಲೊಮೋನನು ತೀರಿಕೊಂಡ ಮೇಲೆ ದೇಶದಲ್ಲಿ ಒಳಜಗಳಗಳು ತಲೆದೋರಿ ದೇಶವು ವಿಭಜನೆಯಾಯಿತು. ಉತ್ತರದ ಹತ್ತು ಕುಲಗಳವರು ತಮ್ಮನ್ನು ''ಇಸ್ರೇಲ್'' ಎಂದು ಕರೆದುಕೊಂಡರು. ದಕ್ಷಿಣದ ಕುಲಗಳವರು ತಮ್ಮನ್ನು ''ಯೆಹೂದ'' ಎಂದು ಕರೆದುಕೊಂಡರು. (ಇಂದಿನ ''ಯೆಹೂದ್ಯರು'' ಎಂಬ ಪದವು ಈ ಹೆಸರಿನಿಂದಲೇ ಬಂದಿದೆ.) ಯೆಹೂದವು ಒಪ್ಪಂದವನ್ನು ನಿಷ್ಠೆಯಿಂದ ಪಾಲಿಸಿತು. ಬಾಬಿಲೋನಿನವರು ಕೊನೆಗೆ ಯೆಹೂದವನ್ನು ಗೆದ್ದು ಅಲ್ಲಿಯ ಜನರನ್ನು ಸೆರೆಹಿಡಿಯುವವರೆಗೆ ದಾವೀದನ ಸಂತತಿಯವರೇ (ರಾಜರ ಕುಟುಂಬವರೇ) ಜೆರುಸಲೇಮಿನಲ್ಲಿ ರಾಜ್ಯಭಾರ ಮಾಡುತ್ತಿದ್ದರು.

ಉತ್ತರ ಸಾಮ್ರಾಜ್ಯದಲ್ಲಿ (ಇಸ್ರೇಲಿನಲ್ಲಿ) ಹಲವಾರು ರಾಜ್ಯಗಳು ಬಂದು ಹೊರಟುಹೋದವು ಏಕೆಂದರೆ ಜನರು ಒಪ್ಪಂದಕ್ಕೆ ನಿಷ್ಠೆಯಿಂದಿರಲಿಲ್ಲ. ವಿವಿಧ ಕಾಲಗಳಲ್ಲಿ ಇಸ್ರೇಲ್ ರಾಜರುಗಳು ಹಲವಾರು ರಾಜಧಾನಿಗಳನ್ನು ಹೊಂದಿದ್ದರು. ಅವುಗಳಲ್ಲಿ ಕೊನೆಯದು ಸಮಾರ್ಯ. ಜನರ ಮೇಲೆ ತಮ್ಮ ಹಿಡಿತವನ್ನು ಬಲಗೊಳಿಸಲು ಇಸ್ರೇಲ್ ರಾಜರುಗಳು ದೇವರನ್ನು ಆರಾಧಿಸತಕ್ಕ ರೀತಿಯನ್ನು ಬದಲಾಯಿಸಿದರು. ಅವರು ಹೊಸ ಯಾಜಕರನ್ನು ಆರಿಸಿಕೊಂಡರು. ಅಲ್ಲದೆ ಎರಡು ಹೊಸ ದೇವಾಲಯಗಳನ್ನು ಕಟ್ಟಿಸಿದರು. ಅವುಗಳಲ್ಲಿ ಒಂದು ದಾನ್‌ನ (ಇಸ್ರೇಲಿನ ಉತ್ತರ ಗಡಿಯಲ್ಲಿ) ಬಳಿಯಲ್ಲಿಯೂ ಮತ್ತೊಂದು ಬೇತೇಲಿನ (ಇಸ್ರೇಲ್ ಮತ್ತು ಯೆಹೂದಗಳ ಗಡಿಯಲ್ಲಿ) ಬಳಿಯಲ್ಲಿಯೂ ಇದ್ದವು. ಇಸ್ರೇಲ್ ಯೆಹೂದಗಳ ನಡುವೆ ಅನೇಕ ಯುದ್ಧಗಳಾದವು. ಈ ಒಳಜಗಳ ಮತ್ತು ಸಂಕಷ್ಟಗಳ ಸಮಯದಲ್ಲಿ ದೇವರು ಯೆಹೂದ ಮತ್ತು ಇಸ್ರೇಲಿಗೆ ಅನೇಕ ಪ್ರವಾದಿಗಳನ್ನು ಕಳುಹಿಸಿದನು. ಕೆಲವು ಪ್ರವಾದಿಗಳು ಯಾಜಕರಾಗಿದ್ದರು, ಇನ್ನಿತರರು  ರೈತರಾಗಿದ್ದರು. ಕೆಲವು ಪ್ರವಾದಿಗಳು ರಾಜರಿಗೆ ಸಲಹೆಗಾರರಾಗಿದ್ದರು, ಇತರರು ಸರಳ ಜೀವನವನ್ನು ನಡೆಸುತ್ತಿದ್ದರು. ಕೆಲವು ಪ್ರವಾದಿಗಳು ತಮ್ಮ ಉಪದೇಶಗಳನ್ನು ಅಥವಾ ಪ್ರವಾದನೆಗಳನ್ನು ಬರೆದಿಟ್ಟರು, ಆದರೆ ಅನೇಕರು ಬರೆದಿಡಲಿಲ್ಲ. ಒಟ್ಟಿನಲ್ಲಿ, ಪ್ರವಾದಿಗಳೆಲ್ಲರು ನ್ಯಾಯ, ನೀತಿ ಮತ್ತು ಸಹಾಯಕ್ಕೆ ದೇವರೇ ಆಶ್ರಯ ಎಂಬ ವಿಷಯಗಳ ಮೇಲೆ ಬೋಧಿಸಿದರು.

ದೇವರ ಕಡೆಗೆ ಮತ್ತೆ ತಿರುಗಿಕೊಳ್ಳದಿದ್ದರೆ, ಜನರು ಸೋಲನ್ನು ಅನುಭವಿಸಿ ಚದರಿಹೋಗುವರೆಂದು ಅನೇಕ ಪ್ರವಾದಿಗಳು ಮುನ್ನೆಚ್ಚರಿಕೆ ಕೊಟ್ಟರು. ಈ ಪ್ರವಾದಿಗಳಲ್ಲಿ ಹಲವರು ಭವಿಷ್ಯದ ವೈಭವಗಳ ಬಗ್ಗೆ ಮತ್ತು ಮುಂಬರುವ ಶಿಕ್ಷೆಗಳ ಬಗ್ಗೆ ದರ್ಶನಗಳನ್ನು ಕಂಡರು. ಹೊಸ ರಾಜನು ಬಂದು ರಾಜ್ಯವಾಳುವ ಕಾಲವನ್ನು ಅವರಲ್ಲಿ ಅನೇಕರು ಎದುರುನೋಡುತ್ತಿದ್ದರು. ಜನರನ್ನು ಸುವರ್ಣಯುಗದತ್ತ ಕೊಂಡೊಯ್ಯುವ ಈ ಹೊಸ ರಾಜನು ದಾವೀದನ ವಂಶದಿಂದಲೇ ಬರುತ್ತಾನೆಂದು ಕೆಲವರು ಗ್ರಹಿಸಿಕೊಂಡರು. ಈ ಹೊಸ ರಾಜನು ನಿತ್ಯಸಾಮ್ರಾಜ್ಯವನ್ನು ಸದಾಕಾಲ ಆಳುತ್ತಾನೆಂದು ಕೆಲವರು ಪ್ರವಾದಿಸಿದರು. ಈ ಹೊಸ ರಾಜನು ತನ್ನ ಜನರನ್ನು ದೇವರ ಬಳಿಗೆ ನಡೆಸಲು ಅನೇಕ ಸಂಕಷ್ಟಗಳನ್ನು ಅನುಭವಿಸುತ್ತಾನೆ ಎಂದು ಇತರರು ಪ್ರವಾದಿಸಿದರು. ಆದರೆ ಈ ಹೊಸ ರಾಜನು ಹೊಸ ಯುಗವನ್ನು ತರಲು ದೇವರಿಂದ ಅಭಿಷೇಕಿತನಾದ ಮೆಸ್ಸೀಯನೆಂದು ಅವರೆಲ್ಲರು ಉಪದೇಶಿಸಿದರು.

**ಇಸ್ರೇಲ್ ಮತ್ತು ಯೆಹೂದಗಳ ಸರ್ವನಾಶ**

ಇಸ್ರೇಲಿನ ಜನರು ದೇವರ ಎಚ್ಚರಿಕೆಗಳಿಗೆ ಗಮನಗೊಡಲಿಲ್ಲ. ಆದ್ದರಿಂದ ಕ್ರಿ. ಪೂ. 722-721 ರಲ್ಲಿ ಸಮಾರ್ಯವು ದಂಡೆತ್ತಿ ಬಂದ ಅಸ್ಸೀರಿಯನ್ನರ ವಶವಾಯಿತು. ಅಸ್ಸೀರಿಯನ್ನರು ಇಸ್ರೇಲ್ ಜನರನ್ನು ಅವರ ಮನೆಗಳಿಂದ ಹಿಡಿದೆಳೆದು ತಮ್ಮ ಸಾಮ್ರಾಜ್ಯಕ್ಕೆ ಸೆರೆಹೊಯ್ದು ದೇಶದಲ್ಲೆಲ್ಲಾ ಚದರಿಸಿಬಿಟ್ಟರು. ಹೀಗೆ ಇಸ್ರೇಲಿನವರು ಯೆಹೂದದ ತಮ್ಮ ಸಹೋದರ ಸಹೋದರಿಯರಿಗೆ ಶಾಶ್ವತವಾಗಿ ಇಲ್ಲವಾದರು. ಅಲ್ಲದೆ ಅಸ್ಸೀರಿಯನ್ನರು ಪರಕೀಯರನ್ನು ತಂದು ಇಸ್ರೇಲ್ ದೇಶದಲ್ಲಿ ನೆಲೆಗೊಳಿಸಿದರು. ಇವರಿಗೆ ಯೆಹೂದ ಮತ್ತು ಇಸ್ರೇಲ್‌ಗಳ ಧಾರ್ಮಿಕ ಸಂಗತಿಗಳನ್ನು ಕಲಿಸಲಾಯಿತು. ಆಗ ಅವರಲ್ಲಿ ಅನೇಕರು ಒಪ್ಪಂದವನ್ನು ನಿಷ್ಠೆಯಿಂದ ಅನುಸರಿಸಲು ಪ್ರಯತ್ನಿಸಿದರು. ಈ ಜನರಿಗೆ ಸಮಾರ್ಯದವರೆಂದು ಹೆಸರಾಯಿತು. ಅಸ್ಸೀರಿಯನ್ನರು ಯೆಹೂದದ ಮೇಲೆಯೂ ಆಕ್ರಮಣ ಮಾಡಿದರು. ಅನೇಕ ಪಟ್ಟಣಗಳು ಅವರಿಗೆ ವಶವಾದವು. ಆದರೂ ದೇವರು ಜೆರುಸಲೇಮನ್ನು ರಕ್ಷಿಸಿದನು. ಸೋತುಹೋದ ಅಸ್ಸೀರಿಯಾದ ರಾಜನು ಸ್ವದೇಶಕ್ಕೆ ಹಿಂತಿರುಗಿದನು, ಮತ್ತು ಅಲ್ಲಿ ತನ್ನ ಇಬ್ಬರು ಗಂಡು ಮಕ್ಕಳಿಂದಲೇ ಕೊಲೆಯಾದನು. ಹೀಗೆ ಯೆಹೂದವು ರಕ್ಷಿಸಲ್ಪಟ್ಟಿತು.

ಸ್ವಲ್ಪ ಸಮಯದವರೆಗೆ ಯೆಹೂದದ ಜನರು ಮಾರ್ಪಾಟಾದರು. ಅವರು ಸ್ವಲ್ಪಕಾಲ ದೇವರಿಗೆ ವಿಧೇಯರಾಗಿದ್ದರು. ಆದರೆ ಕೊನೆಗೆ ಅವರು ಸಹ ಸೋತುಹೋದರು ಮತ್ತು ಚದರಿಹೋದರು. ಬಾಬಿಲೋನ್ ದೇಶವು ಬಲಿಷ್ಠವಾಗಿ ಯೆಹೂದದ ಮೇಲೆ ಆಕ್ರಮಣ ಮಾಡಿತು. ಪ್ರಾರಂಭದಲ್ಲಿ ಅವರು ಕೆಲವೇ ಪ್ರಮುಖರನ್ನು ಸೆರೆಯಾಳುಗಳನ್ನಾಗಿ ಒಯ್ದರು. ಆದರೆ ಕೆಲವು ವರ್ಷಗಳ ನಂತರ ಅಂದರೆ ಕ್ರಿ. ಪೂ. ೫೮೭-೫೮೬ ರಲ್ಲಿ ಅವರು ಜೆರುಸಲೇಮಿನ ದೇವಾಲಯವನ್ನು ನಾಶಮಾಡಲು ಮತ್ತೆ ಬಂದರು. ಕೆಲವರು ತಪ್ಪಿಸಿಕೊಂಡು ಈಜಿಪ್ಟಿಗೆ ಪಲಾಯನ ಮಾಡಿದರು. ಆದರೆ ಬಹುಪಾಲು ಜನರನ್ನು ಬಾಬಿಲೋನಿಗೆ ಸೆರೆಒಯಲಾಯಿತು. ಬಳಿಕ ದೇವರು ತನ್ನ ಪ್ರವಾದಿಗಳನ್ನು ಮತ್ತೆ ಜನರ ಬಳಿಗೆ ಕಳುಹಿಸಿದನು. ಜನರು ಅವರ ಮಾತಿಗೆ ಕಿವಿಗೊಡಲಾರಂಭಿಸಿದರು. ದೇವಾಲಯ ಮತ್ತು ಜೆರುಸಲೇಮ್‌ಗಳ ನಾಶ, ಅಲ್ಲದೆ ಬಾಬಿಲೋನಿನಲ್ಲಿ ಸೆರೆವಾಸ ಜನರಲ್ಲಿ ನಿಜವಾದ ಪರಿವರ್ತನೆಯನ್ನು ತಂದಿತು. ಹೊಸ ರಾಜನ ಮತ್ತು ಒಪ್ಪಂದದ ಕುರಿತಾಗಿ ಪ್ರವಾದಿಗಳು ಹೆಚ್ಚೆಚ್ಚಾಗಿ ಬೋಧಿಸಿದರು. ಪ್ರವಾದಿಗಳಲ್ಲಿ ಒಬ್ಬನಾದ ಯೆರೆಮೀಯನು ಹೊಸ ಒಪ್ಪಂದದ ಕುರಿತಾಗಿಯೂ ಬೋಧಿಸಿದನು. ಈ ಹೊಸ ಒಪ್ಪಂದವು ಕಲ್ಲಿನ ಫಲಕಗಳ ಮೇಲೆ ಲಿಖಿತಗೊಳ್ಳದೆ ದೇವಜನರ ಹೃದಯಗಳಲ್ಲಿ ಲಿಖಿತಗೊಳ್ಳುತ್ತದೆ.

**ಯೆಹೂದಿಗಳು ಪಾಲೆಸ್ಟೇನಿಗೆ ಮರಳಿದರು**

ಈ ನಡುವೆ, ಸೈರಸ್ಸನು ಮೆಡೊ-ಪರ್ಷಿಯನ್ನರ ಸಾಮ್ರಾಜ್ಯದ ಮೇಲೆ ತನ್ನ ಪ್ರಭುತ್ವವನ್ನು ಸ್ಥಾಪಿಸಿ ಬಾಬಿಲೋನನ್ನು ಗೆದ್ದುಕೊಂಡನು. ತಮ್ಮ ಸ್ವದೇಶಗಳಿಗೆ ಹಿಂತಿರುಗಲು ಸೈರಸ್ಸನು ಜನರಿಗೆ ಅನುಮತಿ ನೀಡಿದನು. ಆದ್ದರಿಂದ ೭೦ ವರ್ಷ ಸೆರೆವಾಸದ ನಂತರ ಯೆಹೂದದ ಅನೇಕ ಜನರು ತಮ್ಮ ಮನೆಗಳಿಗೆ ಹಿಂತಿರುಗಿದರು. ಜನರು ತಮ್ಮ ರಾಷ್ಟ್ರವನ್ನು ಮತ್ತೆ ಕಟ್ಟಲು ಪ್ರಯತ್ನಿಸಿದರೂ ಯೆಹೂದವು ಚಿಕ್ಕದಾಗಿ ಬಲಹೀನವಾಗಿಯೇ ಉಳಿಯಿತು. ಸೊಲೊಮೋನನು ಕಟ್ಟಿದ ದೇವಾಲಯದಷ್ಟು ಸುಂದರವಾದ ದೇವಾಲಯವನ್ನು ಕಟ್ಟಲು ಸಾಧ್ಯವಿರದಿದ್ದರೂ ಜನರು ಒಂದು ದೇವಾಲಯವನ್ನು ಕಟ್ಟಿದರು. ಅನೇಕ ಜನರು ನಿಜವಾಗಿಯೂ ದೇವರ ಕಡೆಗೆ ತಿರುಗಿಕೊಂಡು ಧರ್ಮಶಾಸ್ತ್ರವನ್ನು ಪ್ರವಾದಿಗಳ ಬರಹಗಳನ್ನು ಮತ್ತು ಇತರ ಪವಿತ್ರ ಬರಹಗಳನ್ನು ಅಧ್ಯಯನ ಮಾಡತೊಡಗಿದ್ದರು. ಅನೇಕ ಜನರು ಲಿಪಿಕಾರರಾದರು (ವಿಶಿಷ್ಟ ವಿದ್ವಾಂಸರು). ಪವಿತ್ರ ಗ್ರಂಥಗಳ ನಕಲು ಪ್ರತಿಗಳನ್ನು ತಯಾರಿಸಿದವರು ಇವರೇ. ಕಾಲಕ್ರಮೇಣ, ಈ ಜನರು ಪವಿತ್ರ ಗ್ರಂಥಗಳ ಅಧ್ಯಯನಕ್ಕಾಗಿ ಪಾಠಶಾಲೆಗಳನ್ನು ತೆರೆದರು. ಜನರು ಸಬ್ಬತ್ ದಿನದಂದು (ಶನಿವಾರ) ಅಧ್ಯಯನ ಮಾಡಲು, ಪ್ರಾರ್ಥಿಸಲು ಮತ್ತು ದೇವರನ್ನು ಆರಾಧಿಸಲು ಒಟ್ಟಾಗಿ ಸೇರಬರತೊಡಗಿದರು. ಅವರು ತಮ್ಮ ಸಭಾಮಂದಿರಗಳಲ್ಲಿ ಪವಿತ್ರ ಗ್ರಂಥಗಳನ್ನು ಅಧ್ಯಯನ ಮಾಡಿದರು. ಮತ್ತು ಅನೇಕ ಜನರು ಮೆಸ್ಸೀಯನ ಆಗಮನವನ್ನು ಎದುರುನೋಡತೊಡಗಿದರು. ಪಶ್ಚಿಮದಲ್ಲಿ, ಅಲೆಕ್ಸಾಂಡರನು ಗ್ರೀಸಿನ ಮೇಲೆ ಪ್ರಭುತ್ವ ಪಡೆದು, ಸ್ವಲ್ಪಕಾಲದ ನಂತರ ಇಡೀ ಜಗತ್ತನ್ನೇ ಗೆದ್ದುಕೊಂಡನು. ಅವನು ಗ್ರೀಕ್ ಭಾಷೆಯನ್ನು ಮತ್ತು ಗ್ರೀಸಿನ ಸಂಪ್ರದಾಯ ಮತ್ತು ಸಂಸ್ಕೃತಿಗಳನ್ನು ಜಗತ್ತಿನ ಅನೇಕ ಭಾಗಗಳಲ್ಲಿ ಹರಡಿದನು. ಅವನು ತೀರಿಕೊಂಡ ಮೇಲೆ ಅವನ ರಾಜ್ಯವು ಒಡೆದುಹೋಯಿತು. ಬಹುಬೇಗನೆ ಮತ್ತೊಂದು ಸಾಮ್ರಾಜ್ಯವು ಬೆಳೆದು ಪ್ರಪಂಚದ ಬಹು ಭಾಗವನ್ನು ವಶಪಡಿಸಿಕೊಂಡಿತು. ಯೆಹೂದ್ಯರು ವಾಸವಾಗಿದ್ದ ಪಾಲೆಸ್ಟೇನ್ ಸಹ ಇದರ ವಶವಾಯಿತು. ಈ ಸಾಮ್ರಾಜ್ಯವೇ ರೋಮ್ ಸಾಮ್ರಾಜ್ಯ.

ರೋಮಿನ ಅಧಿಪತಿಗಳು ಬಹುಮಟ್ಟಿಗೆ ಕ್ರೂರಿಗಳಾಗಿದ್ದು ಒರಟಾಗಿ ವರ್ತಿಸುತ್ತಿದ್ದರು. ಯೆಹೂದ್ಯರು ಆತ್ಮಾಭಿಮಾನವುಳ್ಳವರಾಗಿ ಮೆಸ್ಸೀಯನು ಬರುತ್ತಾನೆಂದು ಎದುರುನೋಡುತ್ತಿದ್ದರು. ದೇವರು ವಾಗ್ದಾನ ಮಾಡಿದ ಮೆಸ್ಸೀಯನು ಮಾತ್ರ ತಮ್ಮನ್ನು ಆಳಬೇಕೆಂಬುದು ಯೆಹೂದ್ಯರ ಬಯಕೆಯಾಗಿತ್ತು. ದೇವರು ಈ ಮೆಸ್ಸೀಯನ ಮೂಲಕ ಇಡೀ ಜಗತ್ತನ್ನೇ ರಕ್ಷಿಸಲು ಯೋಜಿಸಿದ್ದಾನೆಂಬುದು ಅವರಿಗೆ ತಿಳಿಯಲಿಲ್ಲ. ಯೆಹೂದ್ಯರನ್ನು ಪ್ರಪಂಚದಿಂದ ರಕ್ಷಿಸುವುದೇ ದೇವರ ಯೋಜನೆಯಾಗಿದೆಯೆಂದು ಅವರು ಭಾವಿಸಿಕೊಂಡರು! ಕೆಲವು ಯೆಹೂದ್ಯರಂತೂ ದೇವರಿಂದ ಕಳಹಿಸಲ್ಪಡುವ ಮೆಸ್ಸೀಯನಿಗಾಗಿ ಎದುರುನೋಡುವುದರಲ್ಲೇ ತೃಪ್ತರಾಗಿದ್ದರು. ಆದರೆ ಇತರರು ಹೊಸ ಸಾಮ್ರಾಜ್ಯವನ್ನು ಸ್ಥಾಪಿಸಲು ತಾವು ದೇವರಿಗೆ ಸಹಾಯ ಮಾಡಬೇಕೆಂದು ನಿರ್ಧರಿಸಿದರು. ಈ ಯೆಹೂದ್ಯರನ್ನು ''ದೇಶಾಭಿಮಾನಿ''ಗಳೆಂದು ಕರೆಯುತ್ತಿದ್ದರು. ಈ ದೇಶಾಭಿಮಾನಿಗಳು ರೋಮನ್ನರಿಗೆ ವಿರುದ್ಧವಾಗಿ ಹೋರಾಡಲು ಪ್ರಯತ್ನಿಸಿದರು ಮತ್ತು ರೋಮನ್ನರೊಡನೆ ಸಹಕರಿಸುತ್ತಿದ್ದ ಯೆಹೂದ್ಯರನ್ನು ಸಹ ಆಗಾಗ್ಗೆ ಕೊಲ್ಲುತ್ತಿದ್ದರು.

**ಯೆಹೂದ್ಯರ ಧಾರ್ಮಿಕ ಪಂಗಡಗಳು**

ಕ್ರಿ. ಪೂ. ಮೊದಲನೆ ಶತಮಾನದ ವೇಳೆಗೆ ಮೋಶೆಗೆ ಧರ್ಮಶಾಸ್ತ್ರವು ಯೆಹೂದ್ಯರಿಗೆ ಬಹಳ ಮುಖ್ಯವಾಗಿತ್ತು. ಜನರು ಧರ್ಮ ಶಾಸ್ತ್ರವನ್ನು ಅಧ್ಯಯನ ಮಾಡಿ ಅದರ ಬಗ್ಗೆ ಚರ್ಚೆ ನಡೆಸುತ್ತಿದ್ದರು. ಜನರು ಧರ್ಮಶಾಸ್ತ್ರವನ್ನು ನಾನಾ ರೀತಿಯಲ್ಲಿ ಅರ್ಥಮಾಡಿ ಕೊಂಡರು. ಆದರೆ ಅನೇಕ ಯೆಹೂದ್ಯರು ಧರ್ಮಶಾಸ್ತ್ರಕ್ಕೋಸ್ಕರ ಸಾಯಲು ಸಿದ್ಧರಿದ್ದರು. ಯೆಹೂದ್ಯರಲ್ಲಿ ಮೂರು ಪ್ರಮುಖ ಧಾರ್ಮಿಕ ಪಂಗಡಗಳಿದ್ದವು. ಪ್ರತಿಯೊಂದು ಪಂಗಡದಲ್ಲಿಯೂ ಲಿಪಿಕಾರರಿದ್ದರು. (ವಕೀಲರು ಅಥವಾ ವಿದ್ವಾಂಸರು).

**ಸದ್ದುಕಾಯರು**

ಆ ಪಂಗಡಗಳಲ್ಲಿ ಒಂದು ಪಂಗಡದ ಹೆಸರು ''ಸದ್ದುಕಾಯರು.'' ಬಹುಶಃ ಈ ಹೆಸರು, ರಾಜ ದಾವೀದನ ಪ್ರಧಾನ ಯಾಜಕ ಜಾದೋಕ್ ಎಂಬ ಹೆಸರಿನಿಂದ ಬಂದಿರಬಹುದು. ಈ ಜನರು ಧರ್ಮಶಾಸ್ತ್ರವನ್ನು (ಮೋಶೆಯ ಐದು ಪುಸ್ತಕಗಳು) ಮಾತ್ರ ತಮ್ಮ ಪ್ರಮಾಣ ಗ್ರಂಥವನ್ನಾಗಿ ಒಪ್ಪಿಕೊಂಡರು. ಧರ್ಮಶಾಸ್ತ್ರವು ಯಾಜಕರ ಮತ್ತು ಯಜ್ಞಗಳ ಬಗ್ಗೆ ಅನೇಕ ಸಂಗತಿಗಳನ್ನು ಕಲಿಸಿಕೊಟ್ಟಿತು, ಆದರೆ ಮರಣಾನಂತರ ಜೀವಿತದ ಬಗ್ಗೆ ಅದು ಉಪದೇಶಿಸಲಿಲ್ಲ. ಆದ್ದರಿಂದ, ಸತ್ತವರಿಗಾಗುವ ಪುನರುತ್ಥಾನದ ಬಗ್ಗೆ ಸದ್ದುಕಾಯರು ನಂಬಲಿಲ್ಲ.

**ಫರಿಸಾಯರು**

ಮತ್ತೊಂದು ಪಂಗಡದ ಹೆಸರು ಫರಿಸಾಯರು. ಈ ಹೆಸರು, ''ವಿವರಣೆ'' ಅಥವಾ ''ಬೇರ್ಪಡು'' ಎಂಬರ್ಥವುಳ್ಳ ಹೀಬ್ರೂ ಪದದಿಂದ ಬಂದಿದೆ. ಇವರು ಜನಸಾಮಾನ್ಯರಿಗೆ ಮೋಶೆಯ ಧರ್ಮಶಾಸ್ತ್ರವನ್ನು ಉಪದೇಶಿಸಲು ಅಥವಾ ವಿವರಿಸಲು ಪ್ರಯತ್ನಿಸಿದರು. ಮೋಶೆಯ ಕಾಲದಲ್ಲಿ ಆರಂಭವಾದ ವಾಚಿಕ ಸಂಪ್ರದಾಯ ಇದೆಯೆಂದು ಫರಿಸಾಯರು ನಂಬಿದ್ದರು. ಆಯಾ ಪೀಳಿಗೆಯವರು ತಮ್ಮ ಪೀಳಿಗೆಯವರ ಅವಶ್ಯಕತೆಗೆ ತಕ್ಕಂತೆ ಧರ್ಮಶಾಸ್ತ್ರವನ್ನು ಅರ್ಥೈಸಬಹುದೆಂದು ಫರಿಸಾಯರು ನಂಬಿದ್ದರು. ಇದರಿಂದಾಗಿ, ಇವರು ಮೋಶೆಯ ಧರ್ಮಶಾಸ್ತ್ರವನ್ನು ತಮ್ಮ ಪ್ರಮಾಣ ಗ್ರಂಥವನ್ನಾಗಿ ಒಪ್ಪಿಕೊಳ್ಳುವುದಲ್ಲದೆ ಪ್ರವಾದಿಗಳನ್ನೂ ಪವಿತ್ರ ಬರಹಗಳನ್ನೂ ತಮ್ಮ ಸ್ವಂತ ಸಂಪ್ರದಾಯಗಳನ್ನೂ ಒಪ್ಪಿಕೊಂಡರು. ಆದ್ದರಿಂದ ಅವರು ತಾವು ಏನನ್ನು ತಿನ್ನಬಹುದು ಮತ್ತು ಏನನ್ನು ಮುಟ್ಟಬಹುದು ಎಂಬುದರ ಬಗ್ಗೆ ಬಹಳ ಎಚ್ಚರ ವಹಿಸಿದರು. ತಮ್ಮ ಕೈಗಳನ್ನು ತೊಳೆಯುವ ಬಗ್ಗೆ ಮತ್ತು ತಮ್ಮ ಸ್ನಾನದ ಬಗ್ಗೆ ಎಚ್ಚರ ವಹಿಸಿದರು. ಸತ್ತವರಿಗೆ ಪುನರುತ್ಥಾನವಾಗುತ್ತದೆ ಎಂದು ನಂಬಿದ್ದರು ಏಕೆಂದರೆ ಈ ವಿಷಯವಾಗಿ ಪ್ರವಾದಿಗಳು ಹೇಳಿರುವುದನ್ನು ಅವರು ಅರ್ಥಮಾಡಿಕೊಂಡಿದ್ದರು.

**ಎಸ್ಸೀನರು**

ಮೂರನೆಯ ಪ್ರಮುಖ ಪಂಗಡ ''ಎಸ್ಸೀನರು.'' ಜೆರುಸಲೇಮಿನಲ್ಲಿದ್ದ ಯಾಜಕರಲ್ಲಿ ಅನೇಕರ ಜೀವಿತ ದೇವರ ಇಚ್ಛೆಗನುಸಾರವಾಗಿರಲಿಲ್ಲ. ಅಲ್ಲದೆ, ರೋಮನ್ನರು ಪ್ರಧಾನ ಯಾಜಕರನ್ನು ನೇಮಿಸಿದ್ದರು. ಇವರಲ್ಲಿ ಕೆಲವರು ಮೋಶೆಯ ಧರ್ಮಶಾಸ್ತ್ರದ ಪ್ರಕಾರ ಆ ಹುದ್ದೆಗೆ ಅನರ್ಹರಾಗಿದ್ದರು. ಈ ಕಾರಣಗಳಿಂದಾಗಿ, ಜೆರುಸಲೇಮಿನಲ್ಲಿ ನಡೆಯುವ ಆರಾಧನೆ ಮತ್ತು ಯಜ್ಞಗಳು ಸಮರ್ಪಕವಾಗಿಲ್ಲವೆಂದು ಎಸ್ಸೀನರು ಯೋಚಿಸಿದರು. ಆದ್ದರಿಂದ ಅವರು

ಅಲ್ಲಿಂದ ಹೊರಟುಬಂದು ಜುದೇಯದ ಅರಣ್ಯದಲ್ಲಿ ವಾಸಿಸತೊಡಗಿದರು. ಅವರು ತಮ್ಮದೇ ಆದ ಸಮಾಜವನ್ನು ಮಾಡಿಕೊಂಡರು. ಆ ಸಮಾಜದಲ್ಲಿ ಎಸ್ಸೀನರು ಮಾತ್ರ ವಾಸಿಸಬಹುದಾಗಿತ್ತು. ಎಸ್ಸೀನರು ಉಪವಾಸ ಪ್ರಾರ್ಥನೆ ಮಾಡುತ್ತಿದ್ದರು ಮತ್ತು ದೇವಾಲಯವನ್ನೂ ಯಾಜಕವರ್ಗದವರನ್ನೂ ಶುದ್ಧೀಕರಿಸಲು ದೇವರಿಂದ ಕಳುಹಿಸಲ್ಪಡುವ ಮೆಸ್ಸೀಯನನ್ನು ಎದುರುನೋಡುತ್ತಿದ್ದರು.

**ಹೊಸ ಒಡಂಬಡಿಕೆ**

ದೇವರು ತನ್ನ ಯೋಜನೆಯನ್ನು ಕಾರ್ಯಗತಗೊಳಿಸಲು ಆರಂಭಿಸಿದ್ದನು. ಆತನು ವಿಶೇಷ ಜನಾಂಗವನ್ನು ಆರಿಸಿಕೊಂಡಿದ್ದನು. ತನ್ನ ನ್ಯಾಯಶೀಲತೆ ಮತ್ತು ಒಳ್ಳೆತನಗಳನ್ನು ಆ ಜನರು ಅರ್ಥಮಾಡಿಕೊಳ್ಳಲು ಸಾಧ್ಯವಾಗುವಂತೆ ಆತನು ಅವರೊಂದಿಗೆ ಒಂದು ಒಪ್ಪಂದವನ್ನು ಮಾಡಿಕೊಂಡಿದ್ದನು. ಹೊಸದಾದ ಮತ್ತು ಉತ್ತಮವಾದ ಒಪ್ಪಂದದ ಆಧಾರದ ಮೇಲೆ ಪರಿಪೂರ್ಣವಾದ ಆತ್ಮಿಕ ''ಸಾಮ್ರಾಜ್ಯ''ವನ್ನು ಸ್ಥಾಪಿಸುವುದರ ಮೂಲಕ ಇಡೀ ಜಗತ್ತನ್ನೇ ಆಶೀರ್ವದಿಸಬೇಕೆಂಬ ತನ್ನ ಯೋಜನೆಯನ್ನು ಆತನು ಪ್ರವಾದಿಗಳಿಂದಲೂ ಕವಿಗಳಿಂದಲೂ ಪ್ರಕಟಿಸಿದ್ದನು. ವಾಗ್ದಾನ ಮಾಡಲ್ಪಟ್ಟ ಮೆಸ್ಸೀಯನ ಆಗಮನದಿಂದ ಈ ಯೋಜನೆಯು ಆರಂಭವಾಗಲಿತ್ತು. ಆತನ ಬರುವಿಕೆಯ ಬಗ್ಗೆ ಪ್ರವಾದಿಗಳು ಬಹಳಷ್ಟು ತಿಳಿಸಿದ್ದರು. ಮೆಸ್ಸೀಯನು ಎಲ್ಲಿ ಹುಟ್ಟುತ್ತಾನೆ, ಆತನು ಎಂಥ ವ್ಯಕ್ತಿಯಾಗಿರುತ್ತಾನೆ, ಆತನು ಎಂಥ ಕಾರ್ಯ ಮಾಡಬೇಕಾಗಿದೆ ಎಂಬುದರ ಬಗ್ಗೆ ಆವರು ತಿಳಿಸಿದ್ದರು. ಮೆಸ್ಸೀಯನು ಬಂದು ಒಪ್ಪಂದವನ್ನು ಆರಂಭಿಸತಕ್ಕ ಕಾಲ ಅದಾಗಿತ್ತು.

ದೇವರ ಹೊಸ ಒಪ್ಪಂದವು ಹೇಗೆ ಪ್ರಕಟವಾಯಿತು ಮತ್ತು ಕ್ರಿಸ್ತನಾಗಿದ್ದ (''ಕ್ರಿಸ್ತ'' ಎಂದರೆ ''ಅಭಿಷಕ್ತನು'' ಅಂದರೆ ''ಮೆಸ್ಸೀಯ.'') ಯೇಸು ಹೇಗೆ ಅದನ್ನು ಕಾರ್ಯರೂಪಕ್ಕೆ ತಂದನು ಎಂಬುದರ ಬಗ್ಗೆ ಹೊಸ ಒಡಂಬಡಿಕೆಯ ಬರಹಗಳು ವರ್ಣಿಸುತ್ತವೆ. ಈ ಹೊಸ ಒಪ್ಪಂದವು ಎಲ್ಲಾ ಜನರಿಗೋಸ್ಕರ ಎಂದು ಅವು ಉಪದೇಶಿಸುತ್ತವೆ. ಮತ್ತು ದೇವರ ಕೃಪೆಯಿಂದ ಕೂಡಿದ ಪ್ರೀತಿಗೆ ಮೊದಲನೆ ಶತಮಾನದ ಜನರು ಹೇಗೆ ತಮ್ಮ ಪ್ರತಿಕ್ರಿಯೆಯನ್ನು ವ್ಯಕ್ತಪಡಿಸಿ ಹೊಸ ಒಪ್ಪಂದದಲ್ಲಿ ಪಾಲುಗಾರರಾದರು ಎಂಬುದನ್ನು ಅವು ತಿಳಿಸುತ್ತವೆ. ಪ್ರಪಂಚದಲ್ಲಿ ತನ್ನ ಜನರಿಗೆ ನೀಡುವ ಪರಿಪೂರ್ಣವಾದ ಮತ್ತು ಅರ್ಥಭರಿತವಾದ ಜೀವನದ ಬಗ್ಗೆಯೂ ಮರಣಾನಂತರ ದೇವರೊಂದಿಗಿನ ಜೀವಿತದ ಕುರಿತಾಗಿಯೂ ಅವು ವರ್ಣಿಸುತ್ತವೆ.

ಹೊಸ ಒಡಂಬಡಿಕೆಯು 72 ವಿವಿಧ ಪುಸ್ತಕಗಳನ್ನು ಒಳಗೊಂಡಿದೆ. ಈ ಪುಸ್ತಕಗಳು ಕೊನೆಯಪಕ್ಷ ೮ ಮಂದಿ ವಿವಿಧ ಲೇಖಕರಿಂದ ರಚನೆಗೊಂಡಿವೆ. ಮೊದಲನೆ ಶತಮಾನದಲ್ಲಿ ಎಲ್ಲೆಲ್ಲೂ ಬಳಕೆಯಲ್ಲಿದ್ದ ಗ್ರೀಕ್ ಭಾಷೆಯಲ್ಲಿ ಅವರೆಲ್ಲರೂ ಬರೆದರು. ಹೊಸ ಒಡಂಬಡಿಕೆಯಲ್ಲಿ ಅರ್ಧಕ್ಕಿಂತಲೂ ಹೆಚ್ಚು ಭಾಗವನ್ನು ನಾಲ್ಕು ಮಂದಿ ''ಅಪೊಸ್ತಲರು'' ಬರೆದಿದ್ದಾರೆ. ಯೇಸು ಇವರನ್ನು ತನ್ನ ವಿಶೇಷ ಪ್ರತಿನಿಧಿಗಳನ್ನಾಗಿ ಅಥವಾ ಸಹಾಯಕರನ್ನಾಗಿ ಆರಿಸಿಕೊಂಡಿದ್ದನು. ಅವರಲ್ಲಿ ಮೂವರಾದ ಮತ್ತಾಯ, ಯೋಹಾನ ಮತ್ತು ಪೇತ್ರ ಇವರುಗಳು ಯೇಸು ಭೂಮಿಯ ಮೇಲೆ ಬಾಳಿದಾಗ ಹೊಂದಿದ್ದ 12 ಮಂದಿ ಅತ್ಯಂತ ನಿಕಟವರ್ತಿ ಅನುಯಾಯಿಗಳ ಗುಂಪಿಗೆ ಸೇರಿದ್ದರು. ಮತ್ತೊಬ್ಬ ಲೇಖಕನೆಂದರೆ ಪೌಲ. ಇವನನ್ನು ಯೇಸು ಅದ್ಭುತವಾದ ದರ್ಶನದ ಮೂಲಕ ತನ್ನ ಅಪೊಸ್ತಲನನ್ನಾಗಿ ಆರಿಸಿಕೊಂಡನು.

ಮೊದಲನೆ ನಾಲ್ಕು ಪುಸ್ತಕಗಳಿಗೆ ''ಸುವಾರ್ತೆಗಳು'' ಎಂದು ಹೆಸರು. ಇವು ತಮ್ಮದೇ ಆದ ರೀತಿಯಲ್ಲಿ ಯೇಸು ಕ್ರಿಸ್ತನ ಜೀವಿತ ಮತ್ತು ಮರಣದ ಕುರಿತಾಗಿ ತಿಳಿಸುತ್ತವೆ. ಸಾಮಾನ್ಯವಾಗಿ, ಈ ಪುಸ್ತಕಗಳು ಯೇಸುವಿನ ಚಾರಿತ್ರಿಕ ವಿಷಯಗಳನ್ನು ತಿಳಿಸುವುದಲ್ಲದೆ ಆತನ ಉಪದೇಶವನ್ನು ,ಆತನು ಲೋಕಕ್ಕೆ ಬಂದ ಉದ್ದೇಶವನ್ನು, ಆತನ ಸಾವಿನ ಮಹತ್ವವನ್ನು ಒತ್ತಿಹೇಳುತ್ತವೆ. ನಾಲ್ಕನೆ ಪುಸ್ತಕವಾದ ಯೋಹಾನನ ಸುವಾರ್ತೆಯಲ್ಲಂತೂ ಇದು ವಿಶೇಷವಾಗಿ ಕಂಡುಬರುತ್ತದೆ. ಮೊದಲ ಮೂರು ಸುವಾರ್ತೆಗಳು ಒಳಗೊಂಡಿರುವ ವಿಷಯಗಳು ಪರಸ್ಪರ ಹೋಲುತ್ತವೆ. ನಿಜಕ್ಕೂ ಒಂದರಲ್ಲಿ ಸಿಗುವ ವಿಷಯವು ಇನ್ನೊಂದರಲ್ಲಿಯೂ ಅಥವಾ ಎರಡರಲ್ಲಿಯೂ ಕಾಣಬರತ್ತದೆ. ಅದು ಹೇಗಿದ್ದರೂ ಪ್ರತಿ ಲೇಖಕನು ಭಿನ್ನವಾದ ಶ್ರೋತೃವೃಂದವನ್ನು ಉದ್ದೇಶಿಸಿ ಬರೆದ ಕಾರಣ ಸ್ವಲ್ಪಮಟ್ಟಿಗೆ ವಿಭಿನ್ನವಾದ ಗುರಿಯನ್ನು ಹೊಂದಿದ್ದಂತೆ ಕಾಣುತ್ತದೆ.

ನಾಲ್ಕು ಸುವಾರ್ತೆಗಳಾದ ಮೇಲೆ ''ಅಪೊಸ್ತಲರ ಕಾರ್ಯಗಳು'' ಎಂಬ ಪುಸ್ತಕವಿದೆ. ಯೇಸುವಿನ ಮರಣಾನಂತರದ ಚಾರಿತ್ರಿಕ ಘಟನೆಗಳನ್ನು ಅದು ತಿಳಿಸುತ್ತದೆ. ಜನರೆಲ್ಲರಿಗೂ ದೇವರು ನೀಡಿರುವ ಪ್ರೀತಿಯ ಕೊಡುಗೆಯನ್ನು ಯೇಸುವಿನ ಶಿಷ್ಯರು ಜಗತ್ತಿಗೆಲ್ಲಾ ಹರಡಿದ್ದನ್ನು ಅದು ವರ್ಣಿಸುತ್ತದೆ. ಇಡೀ ಪಾಲೆಸ್ಟೇನಿನಲ್ಲಿ ಮತ್ತು ರೋಮ್ ಸಾಮ್ರಾಜ್ಯದಲ್ಲಿ ''ಸುವಾರ್ತೆ'' ಅಥವಾ ''ಶುಭವಾರ್ತೆ'' ಹೇಗೆ ಅತ್ಯಂತ ಪ್ರಚಲಿತವಾಗಿ ಜನರಿಂದ ಸ್ವೀಕೃತವಾಯಿತು ಎಂಬುದನ್ನು ಅದು ತಿಳಿಸುತ್ತದೆ. ಈ ಪುಸ್ತಕವನ್ನು ಬರೆದವನು ಲೂಕ. ಇವನು ತಾನು ಬರೆದಿರುವ ಬಹುಪಾಲು ಘಟನೆಗಳನ್ನು ಸ್ವತಃ ಕಣ್ಣಾರೆ ಕಂಡಿದ್ದಾನೆ. ಮೂರನೆ ಸುವಾರ್ತಾ ಪುಸ್ತಕವನ್ನು ಬರೆದವನು ಸಹ ಲೂಕನೇ. ಇವನು ಬರೆದ ಸುವಾರ್ತೆ ಯೇಸುವು ಈ ಲೋಕದಲ್ಲಿದ್ದಾಗ ನಡೆದ ಘಟನೆಗಳನ್ನು ತಿಳಿಸಿದರೆ, ಇವನ ''ಅಪೊಸ್ತಲರ ಕಾರ್ಯಗಳು'' ಯೇಸುವಿನ ಪರಲೋಕಾರೋಹಣದ ನಂತರದ ಘಟನೆಗಳನ್ನು ತಿಳಿಸುವುದರಿಂದ ಈ ಎರಡು ಪುಸ್ತಕಗಳು ಒಂದೇ ಪುಸ್ತಕದ ಎರಡು ಭಾಗಗಳಂತೆ ಕಾಣುತ್ತವೆ.

''ಅಪೋಸ್ತಲರ ಕಾರ್ಯಗಳು'' ಎಂಬ ಪುಸ್ತಕದ ನಂತರ ಪತ್ರಗಳ ಸಂಗ್ರಹವಿದೆ. ಈ ಪತ್ರಗಳಲ್ಲಿ ಕೆಲವನ್ನು ನಿರ್ದಿಷ್ಟ ವ್ಯಕ್ತಿಗಳಿಗೂ ಇನ್ನು ಕೆಲವನ್ನು ಕ್ರೈಸ್ತ ಸಭೆಗಳಿಗೂ ಬರೆಯಲಾಗಿದೆ. ಈ ಪುಸ್ತಕಗಳನ್ನು ಕ್ರೈಸ್ತ ನಾಯಕರಾಗಿದ್ದ ಪೌಲ, ಪೇತ್ರ ಮುಂತಾದವರು ಬರೆದಿದ್ದಾರೆ. ಆ ಕಾಲದಲ್ಲಿ ತಲೆದೋರಿದ್ದ ಸಮಸ್ಯೆಗಳನ್ನು ಎದುರಿಸಲು ಜನರಿಗೆ ಸಹಾಯವಾಗಲೆಂದು ಈ ಪತ್ರಗಳನ್ನು ಬರೆಯಲಾಗಿದೆ. ಅವುಗಳು ಜ್ಞಾನಪೂರ್ಣವಾಗಿದ್ದು ಜನರನ್ನು ತಿದ್ದಿ ಉಪದೇಶ ನೀಡುತ್ತವೆ, ಆ ಕಾಲದ ಜನರಿಗಷ್ಟೇ ಅಲ್ಲದೆ ಎಲ್ಲಾ ಕ್ರೈಸ್ತರ ನಂಬಿಕೆ, ಸಹಜೀವನ ಮತ್ತು ಅವರು ಈ ಲೋಕದಲ್ಲಿ ಬಾಳತಕ್ಕ ರೀತಿಯ ಬಗ್ಗೆ ಪ್ರೋತ್ಸಾಹಿಸುತ್ತವೆ.

ಹೊಸ ಒಡಂಬಡಿಕೆಯ ಕೊನೆಯ ಪುಸ್ತಕವಾದ ''ಪ್ರಕಟನೆ''ಯು ಇತರ ಎಲ್ಲಾ ಪುಸ್ತಕಗಳಿಂತ ಭಿನ್ನವಾಗಿದೆ. ಅಪೊಸ್ತಲನಾದ ಯೋಹಾನನು ಕಂಡ ದರ್ಶನಗಳನ್ನು ಮತ್ತು ಪ್ರತಿಮೆಗಳನ್ನು ಹಳೆ ಒಡಂಬಡಿಕೆಯಿಂದ ತೆಗೆದುಕೊಳ್ಳಲಾಗಿದೆ. ಆದ್ದರಿಂದ ಇವುಗಳನ್ನು ಸರಿಯಾಗಿ ಅರ್ಥಮಾಡಿಕೊಳ್ಳಲು ಹಳೆ ಒಡಂಬಡಿಕೆಯ ಬರಹಗಳಿಗೆ ಹೋಲಿಸಬೇಕಾಗುತ್ತದೆ. ತಮ್ಮ ನಾಯಕನೂ ಸಹಾಯಕನೂ ಆದ ಯೇಸು ಕ್ರಿಸ್ತನ ಮೂಲಕ ಮತ್ತು ದೇವರ ಶಕ್ತಿಯ ಮೂಲಕ ದುಷ್ಟಶಕ್ತಿಗಳ ವಿರುದ್ಧವಾಗಿ ಕ್ರೈಸ್ತರಿಗೆ ದೊರೆಯುವ ವಿಜಯದ ಬಗ್ಗೆ ಇದು ಆಶ್ವಾಸನೆಯನ್ನು ನೀಡುತ್ತದೆ.

**ಬೈಬಲ್ ಮತ್ತು ಇಂದಿನ ಓದುಗರು**

ಬೈಬಲಿನ ಪುಸ್ತಕಗಳು ಸಾವಿರಾರು ವರ್ಷಗಳ ಹಿಂದೆ ನಮ್ಮ ಸಂಸ್ಕೃತಿಗಿಂತ ಭಿನ್ನವಾದ ಸಂಸ್ಕೃತಿಯನ್ನು ಹೊಂದಿದ್ದ ಜನರಿಗಾಗಿ ಬರೆಯಲ್ಪಟ್ಟಿವೆ ಎಂಬುದನ್ನು ಇಂದಿನ ಓದುಗರು ನೆನಪಿನಲ್ಲಿಡಬೇಕು. ಈ ಪುಸ್ತಕಗಳ ಬರಹಗಾರರು ಸರ್ವಕಾಲದಲ್ಲಿಯೂ ವಾಸ್ತವವಾದ ತತ್ವಗಳನ್ನು ತಿಳಿಸಿದ್ದರೂ ಅನೇಕ ಚಾರಿತ್ರಿಕ ಸಂಗತಿಗಳನ್ನು ಅವರು ಉಪಯೋಗಿಸುವ ಉದಾಹರಣೆಗಳನ್ನು ಮತ್ತು ಅವರು ಮಾಡುವ ಉಲ್ಲೇಖಗಳನ್ನು ಅರ್ಥಮಾಡಿಕೊಳ್ಳಬೇಕಾದರೆ ಅವರು ಜೀವಿಸಿದ್ದ ಕಾಲದ ಮತ್ತು ಸಂಸ್ಕೃತಿಯ ಬಗ್ಗೆ ಸ್ವಲ್ಪ ಜ್ಞಾನವಿರಬೇಕಾಗುತ್ತದೆ. ಉದಾಹರಣೆಯಾಗಿ, ಅನೇಕ ಬಗೆಯ ಮಣ್ಣಿನ ಮೇಲೆ ಬೀಜ ಬಿತ್ತಿದ ರೈತನ ಕುರಿತು ಯೇಸು ತಿಳಿಸಿದ ಸಾಮ್ಯವನ್ನೇ ತೆಗೆದುಕೊಳ್ಳಬಹುದು. ಅಂದಿನ ಸ್ಥಿತಿಗತಿಗಳು ಇಂದಿನ ಒಬ್ಬನಿಗೆ ಪರಿಚಯವಿಲ್ಲದಿರಬಹುದು. ಆದರೂ ಯೇಸು ಆ ಸಾಮ್ಯದಿಂದ ತಿಳಿಸುವ ಪಾಠ ಯಾವುದೇ ಕಾಲದಲ್ಲಾಗಲೀ ಯಾವುದೇ ಸ್ಥಳದಲ್ಲಾಗಲೀ ಇರುವ ಜನರಿಗೆ ಅನ್ವಯಿಸುತ್ತದೆ.

ಇಂದಿನ ಓದುಗರಿಗೆ ಬೈಬಲಿನ ಪ್ರಪಂಚ ವಿಚಿತ್ರವೆನಿಸಬಹುದು. ಅಂದಿನ ಜನರ ಸಂಪ್ರದಾಯಗಳು, ನಡತೆಗಳು ಮತ್ತು ಮಾತುಕತೆಗಳು ಇಂದಿನ ಜನರಿಗೆ ಪರಿಚಯವಿಲ್ಲದೆ ಇರಬಹುದು. ಅಂದಿನ ಸಂಗತಿಗಳನ್ನು ಆ ಕಾಲದ ಮತ್ತು ಆ ಸ್ಥಳದ ಅಳತೆ ಗೋಲಿನಿಂದ ಮೌಲ್ಯಮಾಪನ ಮಾಡದೆ ಇಂದಿನ ಅಳತೆಗೋಲಿನಿಂದ ಮೌಲ್ಯಮಾಪನ ಮಾಡಿದರೆ ಅನ್ಯಾಯ ಮಾಡಿದಂತೆಯೇ ಸರಿ. ಬೈಬಲ್ ರಚಿತವಾದದ್ದು ಒಂದು ವಿಜ್ಞಾನ ಪುಸ್ತಕದಂತಲ್ಲ ಎಂಬುದನ್ನು ಗಮನದಲ್ಲಿಟ್ಟುಕೊಳ್ಳುವುದು ಸಹ ಮುಖ್ಯ. ಬೈಬಲ್ ರಚನೆಗೊಂಡದ್ದು ಅಂದಿನ ಚಾರಿತ್ರಿಕ ಘಟನೆಗಳನ್ನು ವರ್ಣಿಸುವುದಕ್ಕಾಗಿ ಮತ್ತು ಆ ಘಟನೆಗಳ ಅರ್ಥವನ್ನು ಮಾನವಕೋಟಿಗೆ ತಿಳಿಸುವುದಕ್ಕಾಗಿಯಷ್ಟೇ. ಬೈಬಲಿನ ಉಪದೇಶಗಳು ವಿಜ್ಞಾನದಿಂದ ಹೊರತಾದ ಸಾರ್ವತ್ರಿಕ ಸತ್ಯಾಂಶಗಳನ್ನು ಒಳಗೊಂಡಿದೆ. ಬೈಬಲ್ ಈ ಆಧುನಿಕ ಯುಗದಲ್ಲಿಯೂ ಸಮಕಾಲೀನವಾಗಿದೆ. ಏಕೆಂದರೆ ಮಾನವನ ಆತ್ಮಿಕ ಅಗತ್ಯತೆಗಳ ಕುರಿತು ಅದು ತಿಳಿಸುತ್ತದೆ. ಮಾನವನ ಆತ್ಮಿಕ ಅಗತ್ಯತೆಗಳು ಎಲ್ಲಾ ಕಾಲದಲ್ಲಿಯೂ ಇದ್ದೇ ಇರುತ್ತದೆ.

ಬೈಬಲನ್ನು ಲಕ್ಷ್ಯವಿಟ್ಟು ಓದುವವರು ಅನೇಕ ಪ್ರಯೋಜನಗಳನ್ನು ಹೊಂದಿಕೊಳ್ಳುವರು. ಪ್ರಾಚೀನ ಜಗತ್ತಿನ ಚರಿತ್ರೆಯ ಮತ್ತು ಸಂಸ್ಕೃತಿಯ ಬಗ್ಗೆ ಅವರು ಜ್ಞಾನವನ್ನು ಪಡೆದುಕೊಳ್ಳುವರು; ಯೇಸು ಕ್ರಿಸ್ತನ ಜೀವಿತ ಮತ್ತು ಉಪದೇಶಗಳ ಬಗ್ಗೆ ತಿಳಿದುಕೊಳ್ಳುವರು. ಅಲ್ಲದೆ ಆತನಿಗೆ ಶಿಷ್ಯರಾಗಿರುವ ಬಗೆಯನ್ನು ಕಲಿತುಕೊಳ್ಳುವರು. ಅವರು ಆತ್ಮಿಕ ವಿಷಯದಲ್ಲಿ ಸೂಕ್ಷ್ಮ ಪರಿಜ್ಞಾನವನ್ನು ಹೊಂದಿಕೊಳ್ಳುವರು. ಆತ್ಮಿಕವಾಗಿ ಬಲಿಷ್ಠರಾಗಿರಲು ಮತ್ತು ಆನಂದಭರಿತವಾದ ಜೀವನ ನಡೆಸಲು ಬೇಕಾದ ಪ್ರಾಯೋಗಿಕ ಪಾಠಗಳನ್ನು ಅವರು ಕಲಿತುಕೊಳ್ಳುವರು. ಜೀವನದ ಬಹು ಕಷ್ಟಕರವಾದ ಪ್ರಶ್ನೆಗಳಿಗೆ ಅವರು ಉತ್ತರಗಳನ್ನು ಕಂಡುಕೊಳ್ಳುವರು. ಆದ್ದರಿಂದ ಬೈಬಲನ್ನು ಓದಲು ಅನೇಕ ಉತ್ತಮ ಕಾರಣಗಳಿವೆ. ತೆರೆದ ಮನಸ್ಸಿನಿಂದ ಮತ್ತು ಕುತೂಹಲದಿಂದ ಬೈಬಲನ್ನು ಓದುವವರು ತಮ್ಮ ಜೀವಿತದ ಬಗ್ಗೆ ದೇವರಿಗಿರುವ ಉದ್ದೇಶವನ್ನು ಕಂಡುಕೊಳ್ಳುವರು.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**
- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html

# ಆದಿಕಾಂಡ

### ಭೂಲೋಕದ ಪ್ರಾರಂಭ
### ಮೊದಲನೆಯ ದಿನ – ಬೆಳಕು

1 ಆದಿಯಲ್ಲಿ ದೇವರು ಆಕಾಶವನ್ನೂ ಭೂಮಿಯನ್ನೂ
ಸೃಷ್ಟಿಸಿದನು. 2ಭೂಮಿಯು ಸಂಪೂರ್ಣ ಬರಿ
ದಾಗಿತ್ತು; ಭೂಮಿಯ ಮೇಲೆ ಏನೂ ಇರಲಿಲ್ಲ. ಸಾಗರದ
ಮೇಲೆ ಕತ್ತಲು ಕವಿದಿತ್ತು. ದೇವರಾತ್ಮನು ನೀರಿನ ಮೇಲ್ಭಾ
ಗದ ಮೇಲೆ ಚಲಿಸುತ್ತಿದ್ದನು.* 3ಆಗ ದೇವರು, ‘‘ಬೆಳಕಾ
ಗಲಿ’’ ಅನ್ನಲು ಬೆಳಕಾಯಿತು. 4ದೇವರಿಗೆ ಬೆಳಕು ಒಳ್ಳೆಯ
ದಾಗಿ ಕಂಡಿತು. ಬಳಿಕ ದೇವರು ಕತ್ತಲೆಯಿಂದ ಬೆಳಕನ್ನು
ಬೇರ್ಪಡಿಸಿದನು. 5ದೇವರು ಬೆಳಕಿಗೆ ‘‘ಹಗಲು’’ ಎಂಬು
ದಾಗಿಯೂ ಕತ್ತಲೆಗೆ ‘‘ರಾತ್ರಿ’’ ಎಂಬುದಾಗಿಯೂ
ಹೆಸರಿಟ್ಟನು.

ಹೀಗೆ ಸಾಯಂಕಾಲವೂ ಮುಂಜಾನೆಯೂ ಆಗಿ
ಮೊದಲನೆಯ ದಿನವಾಯಿತು.

### ಎರಡನೆಯ ದಿನ – ಆಕಾಶ

6ಆಮೇಲೆ ದೇವರು, ‘‘ನೀರನ್ನು ಎರಡು ಭಾಗಗ
ಳನ್ನಾಗಿ ವಿಂಗಡಿಸಲು ಜಲಸಮೂಹಗಳ ನಡುವೆ
ಗುಮಟ* ಉಂಟಾಗಲಿ’’ ಎಂದು ಹೇಳಿದನು. 7ಹೀಗೆ
ದೇವರು ಗುಮಟವನ್ನು ಉಂಟುಮಾಡಿ ನೀರನ್ನು ಬೇರ್ಪ
ಡಿಸಿದನು. ನೀರಿನ ಸ್ವಲ್ಪಭಾಗವು ಗುಮಟದ ಮೇಲ್ಭಾಗ
ದಲ್ಲಿತ್ತು; ನೀರಿನ ಮತ್ತೊಂದು ಭಾಗವು ಗುಮಟದ
ಕೆಳಭಾಗದಲ್ಲಿತ್ತು. 8ದೇವರು ಆ ಗುಮಟಕ್ಕೆ ‘‘ಆಕಾಶ’’
ಎಂದು ಹೆಸರಿಟ್ಟನು. ಹೀಗೆ ಸಾಯಂಕಾಲವೂ ಮುಂಜಾ
ನೆಯೂ ಆಗಿ ಎರಡನೆಯ ದಿನವಾಯಿತು.

### ಮೂರನೆಯ ದಿನ – ಒಣನೆಲ ಮತ್ತು ಸಸ್ಯಗಳು

9ಆಮೇಲೆ ದೇವರು, ‘‘ಆಕಾಶದ ಕೆಳಗಿರುವ ನೀರು
ಒಟ್ಟಿಗೆ ಸೇರಿಕೊಂಡು ಒಣನೆಲವು ಕಾಣಿಸಲಿ’’ ಅಂದನು.
ಹಾಗೆಯೇ ಆಯಿತು. 10ದೇವರು ಒಣನೆಲಕ್ಕೆ ‘‘ಭೂಮಿ’’
ಎಂಬುದಾಗಿಯೂ ಒಟ್ಟಿಗೆ ಸೇರಿಕೊಂಡಿದ್ದ ನೀರಿಗೆ
‘‘ಸಮುದ್ರಗಳು’’ ಎಂಬುದಾಗಿಯೂ ಹೆಸರಿಟ್ಟನು.
ದೇವರಿಗೆ ಇವುಗಳು ಒಳ್ಳೆಯದಾಗಿ ಕಂಡವು.
11ಬಳಿಕ ದೇವರು, ‘‘ಭೂಮಿಯು ಸಸ್ಯರಾಶಿಯನ್ನು
ಬೆಳೆಸಲಿ; ಬೀಜಗಳನ್ನು ಫಲಿಸುವ ಸಸ್ಯಗಳು ಬೆಳೆಯಲಿ;
ತನ್ನ ತನ್ನ ಜಾತಿಗನುಸಾರವಾಗಿ ಬೀಜವುಳ್ಳ ಹಣ್ಣುಗಳನ್ನು
ಫಲಿಸುವ ಹಣ್ಣಿನ ಮರಗಳು ಭೂಮಿಯ ಮೇಲೆ ಬೆಳೆ
ಯಲಿ’’ ಅಂದನು. ಹಾಗೆಯೇ ಆಯಿತು. 12ಸಸಿಗಳು
ಭೂಮಿಯ ಮೇಲೆ ಬೆಳೆದವು. ಅವುಗಳಲ್ಲಿ ಬೀಜ
ಫಲಿಸುವ ಗಿಡಗಳಿದ್ದವು. ಬೀಜವುಳ್ಳ ಹಣ್ಣುಗಳನ್ನು ಫಲಿ
ಸುವ ಮರಗಳೂ ಇದ್ದವು. ಪ್ರತಿಯೊಂದು ಸಸಿಯು
ತನ್ನದೇ ಆದ ರೀತಿಯ ಬೀಜವನ್ನು ಫಲಿಸಿತು. ದೇವರಿಗೆ
ಇವುಗಳೆಲ್ಲಾ ಒಳ್ಳೆಯದಾಗಿ ಕಂಡವು.
13ಹೀಗೆ ಸಾಯಂಕಾಲವೂ ಮುಂಜಾನೆಯೂ ಆಗಿ
ಮೂರನೆಯ ದಿನವಾಯಿತು.

### ನಾಲ್ಕನೆಯ ದಿನ–ಸೂರ್ಯ, ಚಂದ್ರ ಮತ್ತು ನಕ್ಷತ್ರ

14ಬಳಿಕ ದೇವರು, ‘‘ಆಕಾಶದಲ್ಲಿ ಬೆಳಕುಗಳು ಉಂಟಾ
ಗಲಿ. ಈ ಬೆಳಕುಗಳು ಹಗಲುರಾತ್ರಿಗಳನ್ನು ಬೇರ್ಪಡಿ
ಸಲಿ. ಈ ಬೆಳಕುಗಳು ವಿಶೇಷವಾದ ಗುರುತುಗಳಾಗಿದ್ದು,
ವಿಶೇಷವಾದ ಸಮಯಗಳನ್ನೂ* ದಿನಗಳನ್ನೂ ವರ್ಷಗ
ಳನ್ನೂ ತೋರಿಸಲಿ. 15ಈ ಬೆಳಕುಗಳು ಆಕಾಶದಲ್ಲಿದ್ದು
ಭೂಮಿಯ ಮೇಲೆ ಬೆಳಕನ್ನು ಪ್ರಕಾಶಿಸಲಿ’’ ಅಂದನು.
ಹಾಗೆಯೇ ಆಯಿತು.

16ಆದ್ದರಿಂದ ದೇವರು ಎರಡು ದೊಡ್ಡಬೆಳಕುಗಳನ್ನು
ಸೃಷ್ಟಿಸಿದನು. ಹಗಲನ್ನು ಆಳುವುದಕ್ಕಾಗಿ ದೇವರು ದೊಡ್ಡ
ಬೆಳಕನ್ನು ಸೃಷ್ಟಿಸಿದನು. ಅಂತೆಯೇ ರಾತ್ರಿಯನ್ನು ಆಳುವು
ದಕ್ಕಾಗಿ ಅದಕ್ಕಿಂತ ಚಿಕ್ಕಬೆಳಕನ್ನು ಸೃಷ್ಟಿಸಿದನು. ದೇವರು
ನಕ್ಷತ್ರಗಳನ್ನು ಸಹ ಸೃಷ್ಟಿಸಿದನು. 17ಭೂಮಿಯ ಮೇಲೆ

---

**ಚಲಿಸುತ್ತಿದ್ದನು** ಪಕ್ಷಿಯು ಗೂಡಿನಲ್ಲಿರುವ ತನ್ನ ಮರಿಗಳನ್ನು ಸಂರಕ್ಷಿಸು ವುದಕ್ಕಾಗಿ ‘‘ಮೇಲೆ ಹಾರಾಡುವಂತೆ ’’ ಎಂಬ ಅರ್ಥವನ್ನು ಹೀಬ್ರೂ ಭಾಷೆಯ ಪದವು ಹೊಂದಿದೆ.

**ಗುಮಟ** ವಾಯುಮಂಡಲ.

**ವಿಶೇಷ ಸಮಯಗಳು** ಅಥವಾ‘‘ವಿಶೇಷ ಕೂಟಗಳು’’ ಯೆಹೂದ್ಯರ ಅನೇಕ ರಜಾದಿನಗಳು ಮತ್ತು ವಿಶೇಷ ಕೂಟಗಳು ಅಮಾವಾಸ್ಯೆ ಮತ್ತು ಪೂರ್ಣಿಮೆಗಳ ಕಾಲದಲ್ಲಿ ಆರಂಭವಾಗುತ್ತದೆ.

ಪ್ರಕಾಶಿಸಲೆಂದು ದೇವರು ಈ ಬೆಳಕುಗಳನ್ನು ಆಕಾಶದಲ್ಲಿ
ರಿಸಿದನು. 18ಹಗಲನ್ನು ಮತ್ತು ರಾತ್ರಿಯನ್ನು ಆಳಲೆಂದು
ದೇವರು ಈ ಬೆಳಕುಗಳನ್ನು ಆಕಾಶದಲ್ಲಿರಿಸಿದನು. ಇವು
ಬೆಳಕನ್ನು ಕತ್ತಲೆಯಿಂದ ಬೇರ್ಪಡಿಸಿದವು. ದೇವರಿಗೆ
ಇವುಗಳು ಒಳ್ಳೆಯದಾಗಿ ಕಂಡವು.

19ಹೀಗೆ ಸಾಯಂಕಾಲವೂ ಮುಂಜಾನೆಯೂ ಆಗಿ
ನಾಲ್ಕನೆಯ ದಿನವಾಯಿತು.

### ಐದನೆಯ ದಿನ–ಮೀನುಗಳು ಮತ್ತು ಪಕ್ಷಿಗಳು

20ಬಳಿಕ ದೇವರು, ‘‘ನೀರಿನಲ್ಲಿ ಅನೇಕ ಜಲಚರಗಳು
ತುಂಬಿಕೊಳ್ಳಲಿ. ಭೂಮಿಯ ಮೇಲೆ ಆಕಾಶದಲ್ಲಿ
ಪಕ್ಷಿಗಳು ಹಾರಾಡಲಿ’’ ಅಂದನು. 21ಹೀಗೆ ದೇವರು
ಸಮುದ್ರದ ಬೃಹದಾಕಾರದ ಪ್ರಾಣಿಗಳನ್ನು ಸೃಷ್ಟಿಸಿದನು.
ಸಮುದ್ರದಲ್ಲಿ ಚಲಿಸುವ ಪ್ರತಿಯೊಂದು ಬಗೆಯ ಜೀವಿ
ಗಳನ್ನು ಮತ್ತು ರೆಕ್ಕೆಗಳುಳ್ಳ ಪ್ರತಿಯೊಂದು ಬಗೆಯ ಪಕ್ಷಿ
ಗಳನ್ನು ದೇವರು ಸೃಷ್ಟಿಸಿದನು. ದೇವರಿಗೆ ಇವುಗಳೆಲ್ಲ
ಒಳ್ಳೆಯದಾಗಿ ಕಂಡವು.

22ದೇವರು ‘‘ಪ್ರಾಣಿಗಳು ಅಸಂಖ್ಯಾತವಾಗಿ ಸಮುದ್ರ
ಗಳನ್ನು ತುಂಬಿಕೊಳ್ಳಲಿ; ಪಕ್ಷಿಗಳು ಅಸಂಖ್ಯಾತವಾಗಿ
ಭೂಮಿಯಲ್ಲೆಲ್ಲಾ ಹರಡಿಕೊಳ್ಳಲಿ’’ ಎಂದು
ಆಶೀರ್ವದಿಸಿದನು.

23ಹೀಗೆ ಸಾಯಂಕಾಲವೂ ಮುಂಜಾನೆಯೂ ಆಗಿ
ಐದನೆಯ ದಿನವಾಯಿತು.

### ಆರನೆಯ ದಿನ – ನೆಲಪ್ರಾಣಿಗಳು ಮತ್ತು ಮನುಷ್ಯರು

24ಬಳಿಕ ದೇವರು, ‘‘ಭೂಮಿಯು ಅನೇಕ ಬಗೆಯ
ಪ್ರಾಣಿಗಳನ್ನು ಅವುಗಳ ಜಾತಿಗನುಸಾರವಾಗಿ ಹುಟ್ಟಿಸಲಿ.
ಪ್ರತಿಯೊಂದು ಬಗೆಯ ದೊಡ್ಡಪ್ರಾಣಿಗಳು ಮತ್ತು
ಹರಿದಾಡುವ ಚಿಕ್ಕಪ್ರಾಣಿಗಳು ಹುಟ್ಟಿಕೊಂಡು ಅಭಿವೃದ್ಧಿ
ಯಾಗಲಿ’’ ಅಂದನು. ಹಾಗೆಯೇ ಆಯಿತು.

25ಹೀಗೆ ದೇವರು ಪ್ರತಿಯೊಂದು ಬಗೆಯ ಪ್ರಾಣಿ
ಯನ್ನು ನಿರ್ಮಿಸಿದನು. ದೇವರು ಕಾಡುಪ್ರಾಣಿಗಳನ್ನು,
ಸಾಕುಪ್ರಾಣಿಗಳನ್ನು ಮತ್ತು ಹರಿದಾಡುವ ಎಲ್ಲಾ ಕ್ರಿಮಿಗ
ಳನ್ನು ಸೃಷ್ಟಿಸಿದನು. ದೇವರಿಗೆ ಇವುಗಳೆಲ್ಲಾ ಒಳ್ಳೆಯದಾಗಿ
ಕಂಡವು.

26ಬಳಿಕ ದೇವರು, ‘‘ಈಗ ನಾವು ಮನುಷ್ಯನನ್ನು*
ನಮ್ಮ ಹೋಲಿಕೆಗೆ ಸರಿಯಾಗಿ ನಿರ್ಮಿಸೋಣ.
ಮನುಷ್ಯನು ನಮ್ಮಂತೆಯೇ ಇರಲಿ. ಮನುಷ್ಯರು ಸಮುದ್ರ
ದಲ್ಲಿರುವ ಎಲ್ಲಾ ಮೀನುಗಳ ಮೇಲೆ, ಆಕಾಶದಲ್ಲಿ
ಹಾರಾಡುವ ಎಲ್ಲಾ ಪಕ್ಷಿಗಳ ಮೇಲೆ, ಮತ್ತು ಭೂಮಿಯ
ಮೇಲೆ ಹರಿದಾಡುವ ಎಲ್ಲಾ ಕ್ರಿಮಿಗಳ ಮೇಲೆ ದೊರೆತನ
ಮಾಡಲಿ’’ ಅಂದನು.

27ಹೀಗೆ ದೇವರು ಮಾನವನನ್ನು ತನ್ನ ಸ್ವರೂಪದಲ್ಲಿ
ಸೃಷ್ಟಿಸಿದನು. ದೇವರು ತನ್ನ ಹೋಲಿಕೆಗೆ ಸರಿಯಾಗಿ
ಮಾನವನನ್ನು ಸೃಷ್ಟಿಸಿದನು. ದೇವರು ಅವರನ್ನು ಗಂಡು
ಮತ್ತು ಹೆಣ್ಣುಗಳಾಗಿ ರೂಪಿಸಿದನು. 28ದೇವರು ಅವರನ್ನು
ಆಶೀರ್ವದಿಸಿದನು. ದೇವರು ಅವರಿಗೆ, ‘‘ನೀವು ಅನೇಕ
ಮಕ್ಕಳನ್ನು ಪಡೆದು ಭೂಮಿಯಲ್ಲೆಲ್ಲಾ ಹರಡಿಕೊಂಡು
ಅದನ್ನು ಸ್ವಾಧೀನಪಡಿಸಿಕೊಳ್ಳಿರಿ. ಸಮುದ್ರದಲ್ಲಿರುವ
ಮೀನುಗಳ ಮೇಲೆ, ಆಕಾಶದಲ್ಲಿರುವ ಪಕ್ಷಿಗಳ ಮೇಲೆ,
ಮತ್ತು ಭೂಮಿಯ ಮೇಲೆ ಚಲಿಸುವ ಪ್ರತಿಯೊಂದು
ಜೀವಿಯ ಮೇಲೆ ದೊರೆತನ ಮಾಡಿರಿ’’ ಅಂದನು.

29ಇದಲ್ಲದೆ ದೇವರು ಅವರಿಗೆ, ‘‘ಬೀಜಫಲಿಸುವ ಎಲ್ಲಾ
ಸಸಿಗಳನ್ನು ಮತ್ತು ಬೀಜವುಳ್ಳ ಹಣ್ಣುಗಳನ್ನು ಫಲಿಸುವ
ಎಲ್ಲಾ ಮರಗಳನ್ನು ನಿಮಗೆ ಆಹಾರವಾಗಿ ಕೊಟ್ಟಿದ್ದೇನೆ.
30ಹಸಿರಾದ ಸಸ್ಯರಾಶಿಯನ್ನೆಲ್ಲಾ ಪ್ರಾಣಿಗಳ ಆಹಾರಕ್ಕಾಗಿ
ಕೊಟ್ಟಿದ್ದೇನೆ. ಭೂಮಿಯ ಮೇಲಿರುವ ಪ್ರತಿಯೊಂದು
ಪ್ರಾಣಿ, ಆಕಾಶದಲ್ಲಿ ಹಾರಾಡುವ ಪ್ರತಿಯೊಂದು ಪಕ್ಷಿ,
ಭೂಮಿಯ ಮೇಲೆ ಹರಿದಾಡುವ ಪ್ರತಿಯೊಂದು ಈ
ಆಹಾರವನ್ನು ತಿನ್ನುವುದು’’ ಅಂದನು. ಹಾಗೆಯೇ
ಆಯಿತು.

31ದೇವರು ತಾನು ಸೃಷ್ಟಿಸಿದ್ದನ್ನೆಲ್ಲಾ ನೋಡಿದಾಗ, ಅವು
ಆತನಿಗೆ ಒಳ್ಳೆಯದಾಗಿ ಕಂಡವು.

ಹೀಗೆ ಸಾಯಂಕಾಲವೂ ಮುಂಜಾನೆಯೂ ಆಗಿ ಆರನೆ
ದಿನವಾಯಿತು.

### ಏಳನೆಯ ದಿನ – ವಿಶ್ರಾಂತಿ

2 ಹೀಗೆ ಭೂಮಿಯೂ ಆಕಾಶವೂ ಅವುಗಳಲ್ಲಿರುವ
ಪ್ರತಿಯೊಂದೂ ಪೂರ್ಣಗೊಂಡವು. 2ದೇವರು ತನ್ನ
ಸೃಷ್ಟಿಕಾರ್ಯವನ್ನು ಮುಕ್ತಾಯಗೊಳಿಸಿದನು. ಆದ್ದರಿಂದ
ಆತನು ಏಳನೆಯ ದಿನದಲ್ಲಿ ವಿಶ್ರಾಂತಿ ತೆಗೆದುಕೊಂಡನು.
3ದೇವರು ಏಳನೆಯ ದಿನವನ್ನು ಆಶೀರ್ವದಿಸಿ ಅದನ್ನು
ಪವಿತ್ರ ದಿನವನ್ನಾಗಿ ಮಾಡಿದನು, ಯಾಕಂದರೆ ತನ್ನ ಎಲ್ಲಾ
ಸೃಷ್ಟಿಕಾರ್ಯಗಳನ್ನು ಮುಗಿಸಿ ಆತನು ವಿಶ್ರಮಿಸಿ
ಕೊಂಡದ್ದು ಆ ದಿನದಲ್ಲೇ.

### ಮಾನವನ ಪ್ರಾರಂಭ

4ಇದು ಆಕಾಶದ ಮತ್ತು ಭೂಮಿಯ ಚರಿತ್ರೆ. ದೇವರು
ಭೂಮಿಯನ್ನು ಮತ್ತು ಆಕಾಶವನ್ನು ಸೃಷ್ಟಿಸಿದಾಗ ನಡೆದ

---

**ಮನುಷ್ಯ** ಹೀಬ್ರೂ ಭಾಷೆಯಲ್ಲಿ ಈ ಪದವು ‘‘ಮಾನವ,’’ ‘‘ಜನರು,’’ ಅಥವಾ ‘‘ಆದಾಮ’’ ಎಂಬ ಹೆಸರಿನ ಅರ್ಥವನ್ನು ನೀಡುತ್ತದೆ. ಈ ಪದವು ‘‘ಭೂಮಿ’’ ಅಥವಾ ‘‘ಕೆಂಪು ಮಣ್ಣು’’ ಎಂಬ ಅರ್ಥವನ್ನು ಕೊಡುವ ಪದದಂತಿದೆ.

ಸಂಗತಿಗಳೇ ಈ ಚರಿತ್ರೆ. [5]ಆಗ ಭೂಮಿಯ ಮೇಲೆ ಯಾವ
ಮರಗಿಡಗಳೂ ಇರಲಿಲ್ಲ. ಭೂಮಿಯ ಮೇಲೆ ಯಾವ
ಸಸಿಯೂ ಬೆಳೆಯುತ್ತಿರಲಿಲ್ಲ; ಯಾಕಂದರೆ ಯೆಹೋ
ವನು ಭೂಮಿಯ ಮೇಲೆ ಇನ್ನೂ ಮಳೆಯನ್ನು ಸುರಿಸಿರ
ಲಿಲ್ಲ; ಭೂಮಿಯನ್ನು ಬೇಸಾಯ ಮಾಡಲು ಯಾವ
ಮನುಷ್ಯನೂ ಇರಲಿಲ್ಲ. [6]ಭೂಮಿಯಿಂದ ನೀರು*
ಚಿಮ್ಮಿಬಂದುನೆಲವನ್ನೆಲ್ಲಾ ನೀರಿನಿಂದ ತೋಯಿಸುತ್ತಿತ್ತು.

[7]ಹೀಗಿರಲು ದೇವರಾದ ಯೆಹೋವನು ನೆಲದಿಂದ
ಮಣ್ಣನ್ನು ತೆಗೆದುಕೊಂಡು ಮನುಷ್ಯನನ್ನು ರೂಪಿಸಿ
ಮೂಗಿನಲ್ಲಿ ಜೀವಶ್ವಾಸವನ್ನು ಊದಿದನು. ಆಗ ಮನು
ಷ್ಯನು ಸಜೀವಿಯಾದನು. [8]ದೇವರಾದ ಯೆಹೋವನು
ಪೂರ್ವ ದಿಕ್ಕಿನಲ್ಲಿ ಏದೆನ್ ಸೀಮೆಯಲ್ಲಿ ಒಂದು ತೋಟ
ವನ್ನು ಮಾಡಿ ತಾನು ನಿರ್ಮಿಸಿದ ಮನುಷ್ಯನನ್ನು ಆ ತೋಟ
ದಲ್ಲಿ ಇರಿಸಿದನು. [9]ದೇವರಾದ ಯೆಹೋವನು ಆ ತೋಟ
ದಲ್ಲಿ ಸುಂದರವಾದ ಪ್ರತಿಯೊಂದು ಮರವನ್ನು ಮತ್ತು
ಊಟಕ್ಕೆ ಬೇಕಾದ ಒಳ್ಳೆಯ ಹಣ್ಣುಗಳನ್ನು ಬಿಡುವ ಪ್ರತಿ
ಯೊಂದು ಮರವನ್ನು ಬೆಳೆಸಿದನು. ಇದಲ್ಲದೆ ತೋಟದ
ಮಧ್ಯಭಾಗದಲ್ಲಿ ಜೀವದಾಯಕ ಮರವನ್ನು ಬೆಳೆಸಿದನು.
ಅಲ್ಲದೆ ಒಳ್ಳೆಯದು ಮತ್ತು ಕೆಟ್ಟದರ ಬಗ್ಗೆ ಜ್ಞಾನಕೊಡುವ
ಮರವನ್ನೂ ಬೆಳೆಸಿದನು.

[10]ಏದೆನಿನಿಂದ ಹರಿದುಬರುತ್ತಿದ್ದ ನದಿಯು ತೋಟಕ್ಕೆ
ಬೇಕಾದ ನೀರನ್ನು ಒದಗಿಸುತ್ತಿತ್ತು. ಬಳಿಕ ಅದೇ ನದಿಯು
ಶಾಖೆಗಳಾಗಿ ಒಡೆದು ನಾಲ್ಕು ಉಪನದಿಗಳಾಯಿತು.
[11]ಮೊದಲನೆಯ ನದಿಯ ಹೆಸರು ಪೀಶೋನ್. ಹವೀಲ
ದೇಶದಲ್ಲೆಲ್ಲಾ ಹರಿಯುತ್ತಿದ್ದ ನದಿ ಇದೇ. [12]ಈ ದೇಶ
ದಲ್ಲಿ ಒಳ್ಳೆಯ ಬಂಗಾರ ದೊರೆಯುತ್ತಿತ್ತು. ಅಲ್ಲದೆ
ಗುಗ್ಗುಲ* ಗೋಮೇಧಿಕ ರತ್ನವೂ* ದೊರಕುತ್ತಿದ್ದವು.
[13]ಎರಡನೆಯ ನದಿಯ ಹೆಸರು ಗೀಹೋನ್. ಇಥಿಯೋ
ಪಿಯ* ದೇಶದಲ್ಲೆಲ್ಲಾ ಹರಿಯುತ್ತಿದ್ದ ನದಿ ಇದೇ.
[14]ಮೂರನೆಯ ನದಿಯ ಹೆಸರು ಟೈಗ್ರಿಸ್. ದಕ್ಷಿಣ ಅಸ್ಸೀ
ರಿಯ ದೇಶದಲ್ಲಿ ಹರಿಯುತ್ತಿದ್ದ ನದಿ ಇದೇ. ನಾಲ್ಕನೆಯ
ನದಿಯ ಹೆಸರು ಯೂಫ್ರೇಟೀಸ್.

[15]ದೇವರಾದ ಯೆಹೋವನು ಆ ಮನುಷ್ಯನನ್ನು ಕರೆದು
ಕೊಂಡು ಹೋಗಿ ಏದೆನ್ ತೋಟವನ್ನು ವ್ಯವಸಾಯ
ಮಾಡುವುದಕ್ಕಾಗಿಯೂ ಅದನ್ನು ನೋಡಿಕೊಳ್ಳುವು
ದಕ್ಕೂ ಏದೆನ್‌ತೋಟದಲ್ಲಿರಿಸಿದನು. [16]ದೇವರಾದ
ಯೆಹೋವನು ಆ ಮನುಷ್ಯನಿಗೆ, ''ತೋಟದಲ್ಲಿರುವ
ಯಾವ ಮರದ ಹಣ್ಣನ್ನು ಬೇಕಾದರೂ ನೀನು ತಿನ್ನ
ಬಹುದು. [17]ಆದರೆ ಒಳ್ಳೆಯದು ಮತ್ತು ಕೆಟ್ಟದ್ದರ ಬಗ್ಗೆ
ಜ್ಞಾನ ಕೊಡುವ ಮರದ ಹಣ್ಣನ್ನು ಮಾತ್ರ ನೀನು ತಿನ್ನ
ಕೂಡದು. ಒಂದುವೇಳೆ ಆ ಮರದ ಹಣ್ಣನ್ನು ತಿಂದರೆ
ನೀನು ಸಾಯುವೆ!'' ಎಂದು ಆಜ್ಞಾಪಿಸಿದನು.

### ಮೊದಲನೆಯ ಸ್ತ್ರೀ

[18]ಬಳಿಕ ದೇವರಾದ ಯೆಹೋವನು, ''ಮನುಷ್ಯನು
ಒಬ್ಬಂಟಿಗನಾಗಿರುವುದು ಒಳ್ಳೆಯದಲ್ಲವೆಂದು ನನಗೆ
ತೋರುತ್ತದೆ. ಅವನಿಗೆ ಸರಿಹೊಂದುವ ಸಹಕಾರಿಣಿ
ಯನ್ನು ನಿರ್ಮಿಸುತ್ತೇನೆ'' ಎಂದುಕೊಂಡನು.

[19]ದೇವರಾದ ಯೆಹೋವನು ನೆಲದ ಮಣ್ಣಿನಿಂದ
ಭೂಮಿಯ ಮೇಲಿರುವ ಪ್ರತಿಯೊಂದು ಪಶುವನ್ನೂ
ಆಕಾಶದಲ್ಲಿರುವ ಪ್ರತಿಯೊಂದು ಪಕ್ಷಿಯನ್ನೂ ನಿರ್ಮಿಸಿ
ದನು. ದೇವರಾದ ಯೆಹೋವನು ಇವುಗಳನ್ನೆಲ್ಲ ಮನು
ಷ್ಯನ ಬಳಿಗೆ ಬರಮಾಡಿದನು. ಇವುಗಳಲ್ಲಿ ಪ್ರತಿ
ಯೊಂದಕ್ಕೂ ಮನುಷ್ಯನು ಹೆಸರಿಟ್ಟನು. [20]ಭೂಮಿಯ
ಮೇಲಿನ ಎಲ್ಲಾ ಪಶುಗಳಿಗೂ ಆಕಾಶದಲ್ಲಿ ಹಾರಾಡುವ
ಎಲ್ಲಾ ಪಕ್ಷಿಗಳಿಗೂ ಮತ್ತು ಕಾಡಿನಲ್ಲಿರುವ ಎಲ್ಲಾ ಕ್ರೂರ
ಪ್ರಾಣಿಗಳಿಗೂ ಮನುಷ್ಯನು ಹೆಸರಿಟ್ಟನು. ಮಾನವನು
ಅನೇಕಾನೇಕ ಪ್ರಾಣಿಗಳನ್ನು ಮತ್ತು ಪಕ್ಷಿಗಳನ್ನು ನೋಡಿ
ದನು. ಆದರೆ ಅವುಗಳಲ್ಲಿ ತನಗೆ ಸರಿಹೊಂದುವ ಸಹಕಾರಿ
ಣಿಯನ್ನು ಅವನು ಕಾಣಲಿಲ್ಲ. [21]ಆದ್ದರಿಂದ ದೇವರಾದ
ಯೆಹೋವನು ಮನುಷ್ಯನಿಗೆ ಗಾಢವಾದ ನಿದ್ರೆಯನ್ನು
ಬರಮಾಡಿ ಅವನ ದೇಹದ ಪಕ್ಕೆಲುಬುಗಳಲ್ಲಿ ಒಂದನ್ನು
ತೆಗೆದುಕೊಂಡು ಆ ಪಕ್ಕೆಲುಬಿನ ಸ್ಥಳವನ್ನು ಮಾಂಸದಿಂದ
ಮುಚ್ಚಿದನು. [22]ಆತನು ಮನುಷ್ಯನ ಪಕ್ಕೆಲುಬಿನಿಂದ
ಸ್ತ್ರೀಯನ್ನು ಸೃಷ್ಟಿಸಿ ಅವಳನ್ನು ಮನುಷ್ಯನ ಬಳಿಗೆ ಕರೆದು
ಕೊಂಡು ಬಂದನು.

[23]ಆಗ ಅವನು ಆಕೆಯನ್ನು ನೋಡಿ,

''ಈಗ ಸರಿ, ಈಕೆ ನನ್ನಂತೆಯೇ ಇದ್ದಾಳೆ. ಈಕೆಯ
ಎಲುಬುಗಳು ನನ್ನ ಎಲುಬುಗಳಿಂದ ಬಂದಿವೆ.
ಈಕೆಯ ದೇಹವು ನನ್ನ ದೇಹದಿಂದ ಬಂದಿದೆ.
ಈಕೆಗೆ ನಾನು ಸ್ತ್ರೀ ಎಂದು ಹೆಸರಿಡುವೆ. ಆದುದ
ರಿಂದ ಈಕೆ ಮನುಷ್ಯನಿಂದ ಉತ್ಪತ್ತಿಯಾದವಳು''
ಎಂದನು.

24 ಆದ್ದರಿಂದ ಪುರುಷನು ತನ್ನ ತಂದೆತಾಯಿಗಳನ್ನು
ಬಿಟ್ಟು ತನ್ನ ಹೆಂಡತಿಯನ್ನು ಸೇರಿಕೊಳ್ಳುವನು.
ಅವರಿಬ್ಬರೂ ಒಂದೇ ಶರೀರವಾಗುವರು.

---

**ನೀರು** ಅಥವಾ ''ಇಬ್ಬನಿ.''

**ಗುಗ್ಗುಲ** ಅತ್ಯಂತ ಬೆಲೆಬಾಳುವ ಸುಗಂಧ ವಾಸನೆಯುಳ್ಳ ಗೋಂದು.

**ಗೋಮೇಧಿಕ ರತ್ನ** ನೀಲಿ ಅಥವಾ ಕಂದು ಬಣ್ಣಗಳ ಅನೇಕ ಪದರುಗಳುಳ್ಳ ಅಮೂಲ್ಯವಾದ ಕಲ್ಲು.

**ಇಥಿಯೋಪಿಯ** ಅಥವಾ ''ಕೂಷ್'' ಕೆಂಪು ಸಮುದ್ರದ ಬಳಿಯಿರುವ ಆಫ್ರಿಕಾದ ಒಂದು ದೇಶ.

25 ಆ ಪುರುಷನು ಮತ್ತು ಅವನ ಹೆಂಡತಿ ಬೆತ್ತಲೆ
ಯಾಗಿದ್ದರೂ ನಾಚಿಕೊಳ್ಳಲಿಲ್ಲ.

### ಪಾಪದ ಪ್ರಾರಂಭ

3 ದೇವರಾದ ಯೆಹೋವನು ಸೃಷ್ಟಿಸಿದ ಪ್ರಾಣಿಗಳ
ಲ್ಲೆಲ್ಲಾ ಹಾವು ಅತಿ ಬುದ್ಧಿವಂತವಾದ ಮತ್ತು ಕುತಂತ್ರ
ವುಳ್ಳ ಜಂತುವಾಗಿತ್ತು. ಹಾವು ಸ್ತ್ರೀಯನ್ನು ಮೋಸಗೊಳಿಸ
ಬೇಕೆಂದಿತ್ತು. ಹಾವು ಅವಳಿಗೆ, ‘‘ಅಮ್ಮಾ ಈ ತೋಟ
ದಲ್ಲಿರುವ ಯಾವ ಮರದ ಹಣ್ಣನ್ನೂ ನೀವು ತಿನ್ನ
ಕೂಡದೆಂದು ದೇವರು ನಿಮಗೆ ಹೇಳಿರುವುದು
ನಿಜವೇ?’’ ಎಂದು ಕೇಳಿತು.

2 ಸ್ತ್ರೀಯು ಹಾವಿಗೆ, ‘‘ಇಲ್ಲ! ದೇವರು ಹಾಗೆ ಹೇಳಲಿಲ್ಲ!
ತೋಟದಲ್ಲಿರುವ ಮರಗಳ ಹಣ್ಣುಗಳನ್ನು ನಾವು ತಿನ್ನ
ಬಹುದು.
3 ಆದರೆ ಒಂದು ಮರದ ಹಣ್ಣನ್ನು ಮಾತ್ರ ನಾವು
ತಿನ್ನಕೂಡದು. ದೇವರು ನಮಗೆ, ‘ತೋಟದ ಮಧ್ಯದ
ಲ್ಲಿರುವ ಮರದ ಹಣ್ಣನ್ನು ನೀವು ತಿನ್ನಕೂಡದು; ಆ ಮರ
ವನ್ನು ಮುಟ್ಟಕೂಡದು. ಇಲ್ಲವಾದರೆ ನೀವು ಸಾಯುವಿರಿ’
ಎಂದು ಹೇಳಿದ್ದಾನೆ’’’ ಎಂಬುದಾಗಿ ಉತ್ತರ ಕೊಟ್ಟಳು.

4 ಅದಕ್ಕೆ ಹಾವು ಸ್ತ್ರೀಗೆ, ‘‘ನೀವು ಸಾಯುವುದಿಲ್ಲ.
5 ನೀವು
ಆ ಮರದ ಹಣ್ಣನ್ನು ತಿಂದರೆ ನಿಮಗೆ ಒಳ್ಳೆಯದರ ಮತ್ತು
ಕೆಟ್ಟದ್ದರ ಬಗ್ಗೆ ಜ್ಞಾನ ಬರುತ್ತದೆಯೆಂದು ದೇವರಿಗೆ
ಗೊತ್ತಿದೆ. ಅಲ್ಲದೆ ನೀವು ದೇವರಿಗೆ ಸರಿಸಮಾನ
ರಾಗುವಿರಿ’’ ಎಂದು ಹೇಳಿತು.

6 ಸ್ತ್ರೀಗೆ ಆ ಮರವು ಸುಂದರವಾಗಿ ಕಂಡಿತು. ಅದರ
ಹಣ್ಣು ಆಕೆಗೆ ತಿನ್ನಲು ಯೋಗ್ಯವಾಗಿ ಕಂಡಿತು. ಆ ಮರವು
ತನ್ನನ್ನು ಜ್ಞಾನಿಯನ್ನಾಗಿ ಮಾಡುತ್ತದೆಯೆಂದು ಆಕೆ
ಉತ್ಸಾಹಗೊಂಡಳು.ಆದ್ದರಿಂದ ಸ್ತ್ರೀಯು ಆ ಮರದ
ಹಣ್ಣನ್ನು ಕಿತ್ತುಕೊಂಡು ತಿಂದಳು; ತನ್ನೊಂದಿಗಿದ್ದ ಗಂಡ
ನಿಗೂ ಸ್ವಲ್ಪ ಹಣ್ಣನ್ನು ಕೊಟ್ಟಳು. ಅವನು ಸಹ ಅದನ್ನು
ತಿಂದನು.

7 ಕೂಡಲೇ ಪುರುಷನಲ್ಲಿಯೂ ಸ್ತ್ರೀಯಲ್ಲಿಯೂ ಬದ
ಲಾವಣೆಗಳಾದವು. ಅವರ ಕಣ್ಣುಗಳು ತೆರೆದವು. ಅವರಿಗೆ
ಎಲ್ಲವೂ ವಿಚಿತ್ರವಾಗಿ ಕಂಡವು. ತಾವು ಬೆತ್ತಲೆಯಿಂದಿ
ರುವುದನ್ನು ಕಂಡು ಅಂಜೂರದ ಎಲೆಗಳನ್ನು ಕಿತ್ತು ಒಂದ
ಕ್ಕೊಂದು ಜೋಡಿಸಿ ಸುತ್ತಿಕೊಂಡರು.

ಅಂದು ಸಂಜೆ ತಂಗಾಳಿ ಬೀಸುತ್ತಿರಲು ದೇವರಾದ
ಯೆಹೋವನು ತೋಟದಲ್ಲಿ ತಿರುಗಾಡುತ್ತಿದ್ದನು. ಆತನ
ಸಪ್ಪಳವನ್ನು ಕೇಳಿದ ಪುರುಷನು ಮತ್ತು ಅವನ ಹೆಂಡ
ತಿಯು ತೋಟದ ಮರಗಳ ಮರೆಯಲ್ಲಿ ಅಡಗಿ
ಕೊಂಡರು.

9 ದೇವರಾದ ಯೆಹೋವನು ಪುರುಷನಿಗೆ, ‘‘ನೀನು
ಎಲ್ಲಿರುವೆ?’’ ಎಂದು ಕೂಗಿಕೇಳಿದನು.

10 ಅದಕ್ಕೆ ಪುರುಷನು, ‘‘ನೀನು ತೋಟದಲ್ಲಿ ತಿರು
ಗಾಡುತ್ತಿರುವ ಸಪ್ಪಳವನ್ನು ನಾನು ಕೇಳಿದೆನು. ಆದರೆ
ನಾನು ಬೆತ್ತಲೆಯಾಗಿದ್ದರಿಂದ ಭಯದಿಂದ ಅಡಗಿ
ಕೊಂಡೆನು’’ ಎಂದು ಹೇಳಿದನು.

11 ದೇವರು ಪುರುಷನಿಗೆ ‘‘ನೀನು ಬೆತ್ತಲೆಯಾಗಿರುವೆ
ಎಂದು ನಿನಗೆ ಹೇಳಿದವರು ಯಾರು? ವಿಶೇಷವಾದ ಆ
ಮರದ ಹಣ್ಣನ್ನು ನೀನು ತಿಂದೆಯಾ? ಆ ಮರದ ಹಣ್ಣನ್ನು
ತಿನ್ನಕೂಡದೆಂದು ನಾನು ನಿನಗೆ ಆಜ್ಞಾಪಿಸಿದ್ದೆನಲ್ಲಾ!’’
ಎಂದು ಹೇಳಿದನು.

12 ಅದಕ್ಕೆ ಪುರುಷನು, ‘‘ನೀನು ನನಗಾಗಿ ಕೊಟ್ಟ
ಸ್ತ್ರೀಯು ಆ ಮರದ ಹಣ್ಣನ್ನು ನನಗೆ ಕೊಟ್ಟಳು; ಆದ್ದರಿಂದ
ನಾನು ತಿಂದೆ’’ ಎಂದನು.

13 ಆಗ ದೇವರಾದ ಯೆಹೋವನು ಸ್ತ್ರೀಗೆ, ‘‘ನೀನು
ಮಾಡಿದ್ದೇನು?’’ ಎಂದು ಕೇಳಿದನು.

ಅದಕ್ಕೆ ಸ್ತ್ರೀಯು, ‘‘ಆ ಹಾವಿನ ಮೋಸಕ್ಕೆ ಒಳಗಾಗಿ
ನಾನು ಆ ಹಣ್ಣನ್ನು ತಿಂದೆ’’ ಅಂದಳು.

14 ಆಗ ದೇವರಾದ ಯೆಹೋವನು ಹಾವಿಗೆ,

‘‘ನೀನು ಮಾಡಿದ ಈ ಕೆಟ್ಟಕಾರ್ಯದಿಂದ ನಿನಗೂ
ಕೇಡುಗಳಾಗುವುದು.* ಬೇರೆಲ್ಲಾ ಪ್ರಾಣಿಗಳಿ
ಗಿಂತಲೂ ನಿನಗೆ ಹೀನಸ್ಥಿತಿ ಉಂಟಾಗುವುದು.
ನೀನು ಹೊಟ್ಟೆಯಿಂದಲೇ ತೆವಳಿಕೊಂಡು ನಿನ್ನ
ಜೀವಮಾನವೆಲ್ಲಾ ಮಣ್ಣನ್ನೇ ತಿನ್ನಬೇಕು.
15 ನೀನು ಮತ್ತು ಸ್ತ್ರೀಯು ಒಬ್ಬರಿಗೊಬ್ಬರು
ವೈರಿಗಳಾಗಿರುವಂತೆ ಮಾಡುವೆನು. ನಿನ್ನ ಮಕ್ಕಳು
ಮತ್ತು ಅವಳ ಮಕ್ಕಳು* ಒಬ್ಬರಿಗೊಬ್ಬರು ವೈರಿ
ಗಳಾಗಿರುವರು. ನೀನು ಆಕೆಯ ಮಗನ ಪಾದ
ವನ್ನು ಕಚ್ಚುವೆ. ಆದರೆ ಅವನು ನಿನ್ನ ತಲೆಯನ್ನು
ಜಜ್ಜಿಹಾಕುವನು’’ ಎಂದನು.

16 ಬಳಿಕ ದೇವರಾದ ಯೆಹೋವನು ಸ್ತ್ರೀಗೆ,

‘‘ನೀನು ಗರ್ಭಿಣಿಯಾಗಿರುವಾಗ ಬಹು ಸಂಕಟ
ಪಡುವೆ. ನೀನು ಮಕ್ಕಳನ್ನು ಹೆರುವಾಗ ಬಹಳ
ವೇದನೆಪಡುವೆ. ನೀನು ಗಂಡನನ್ನು ಬಹಳವಾಗಿ
ಇಷ್ಟಪಡುವೆ; ಆದರೆ ಅವನು ನಿನ್ನನ್ನು ಆಳುವನು’’
ಎಂದನು.

---

**ಕೇಡುಗಳಾಗುವುದು** ಅಕ್ಷರಶಃ ‘‘ನೀನು ಶಾಪಗ್ರಸ್ತನಾಗಿರುವೆ.’’

**ಅವಳ ಮಕ್ಕಳು** ಅಕ್ಷರಶಃ ಹೀಬ್ರೂ ಭಾಷೆಯಲ್ಲಿ ‘‘ನಿನ್ನ ಬೀಜ ಮತ್ತು ಅವಳ ಬೀಜ.’’

[17]ಆಮೇಲೆ ದೇವರಾದ ಯೆಹೋವನು ಪುರುಷನಿಗೆ,

‘‘ವಿಶೇಷವಾದ ಆ ಮರದ ಹಣ್ಣನ್ನು ತಿನ್ನಕೂಡ
ದೆಂದು ನಾನು ನಿನಗೆ ಆಜ್ಞಾಪಿಸಿದ್ದೆ. ಆದರೆ ನೀನು
ನಿನ್ನ ಹೆಂಡತಿಯ ಮಾತನ್ನು ಕೇಳಿ ಆ ಮರದ
ಹಣ್ಣನ್ನು ತಿಂದೆ. ನಿನ್ನ ದೆಸೆಯಿಂದ ನಾನು ಭೂಮಿ
ಯನ್ನು ಶಪಿಸುವೆನು. ಭೂವಿಯು ಫಲಿಸುವ
ಆಹಾರಕ್ಕಾಗಿ ನೀನು ನಿನ್ನ ಜೀವಮಾನದ ದಿನ
ಗಳಲ್ಲೆಲ್ಲಾ ಕಷ್ಟಪಟ್ಟು ದುಡಿಯಲೇಬೇಕು.

[18] ‘‘ಭೂಮಿಯು ನಿನಗೋಸ್ಕರ ಮುಳ್ಳುಗಿಡಗಳನ್ನೂ
ಕಳೆಗಳನ್ನೂ ಬೆಳೆಸುವುದು. ಹೊಲದಲ್ಲಿ
ಬೆಳೆಯುವ ಬೆಳೆಯನ್ನು ನೀನು ತಿನ್ನುವೆ.
[19] ನಿನ್ನ ಮುಖದಲ್ಲಿ ಬೆವರು ಹರಿಯುವ ತನಕ
ನೀನು ಆಹಾರಕ್ಕಾಗಿ ಕಷ್ಟಪಟ್ಟು ದುಡಿಯುವೆ.
ನೀನು ಸಾಯುವ ದಿನದವರೆಗೆ ಕಷ್ಟಪಟ್ಟು ಕೆಲಸ
ಮಾಡುವೆ. ಆಮೇಲೆ ನೀನು ಮಣ್ಣಾಗುವೆ. ನಾನು
ನಿನ್ನನ್ನು ನಿರ್ಮಿಸಲು ಮಣ್ಣನ್ನು ಉಪಯೋಗಿ
ಸಿದೆ. ನೀನು ಸತ್ತಾಗ ಮತ್ತೆ ಮಣ್ಣೇ ಆಗುವೆ’’
ಎಂದನು.

[20]ಆದಾಮನು ತನ್ನ ಹೆಂಡತಿಗೆ ಹವ್ವ* ಎಂದು ಹೆಸ
ರಿಟ್ಟನು. ಆದಾಮನು ಹವ್ವ ಎಂದು ಹೆಸರಿಡಲು ಕಾರಣ
ವೇನೆಂದರೆ ಈ ಲೋಕದಲ್ಲಿ ಹುಟ್ಟಿದ ಪ್ರತಿಯೊಬ್ಬರಿಗೂ
ಆಕೆಯೇ ಮೂಲತಾಯಿ.

[21]ದೇವರಾದ ಯೆಹೋವನು ಪ್ರಾಣಿಯ ಚರ್ಮದಿಂದ
ಉಡುಪುಗಳನ್ನು ಮಾಡಿ ಆದಾಮನಿಗೆ ಮತ್ತು ಅವನ
ಹೆಂಡತಿಗೆ ತೊಡಿಸಿದನು.

[22]ದೇವರಾದ ಯೆಹೋವನು, ‘‘ಮನುಷ್ಯನು ಒಳ್ಳೆಯ
ದರ ಮತ್ತು ಕೆಟ್ಟದರ ಬಗ್ಗೆ ತಿಳಿದುಕೊಂಡು ನಮ್ಮಂತಾ
ದನು. ಈಗ ಮನುಷ್ಯನು ಜೀವದಾಯಕ ಮರದ ಹಣ್ಣನ್ನೇ
ನಾದರೂ ತೆಗೆದುಕೊಂಡು ತಿಂದರೆ ಅವನು ಸದಾಕಾಲ
ಬದುಕುವನು’’ ಅಂದುಕೊಂಡನು.

[23]ಆದ್ದರಿಂದ ಆತನು ಆದಾಮನನ್ನು ಅವನು ಉತ್ಪತ್ತಿ
ಗೊಂಡಿದ್ದ ನೆಲದಲ್ಲಿ ವ್ಯವಸಾಯ ಮಾಡಲು ಬಲವಂತ
ವಾಗಿ ಏದೆನ್ ತೋಟದಿಂದ ಹೊರಡಿಸಿಬಿಟ್ಟನು.

[24]ಅಲ್ಲದೆ ಏದೆನ್ ತೋಟವನ್ನು ಸಂರಕ್ಷಿಸುವುದಕ್ಕಾಗಿ
ಆತನು ಕೆರೂಬಿದೂತರನ್ನು* ತೋಟದ ಪೂರ್ವ
ಭಾಗದಲ್ಲಿ ಇರಿಸಿದನು. ಇದಲ್ಲದೆ ಆತನು ಬೆಂಕಿಯ
ಖಡ್ಗವನ್ನು ಅಲ್ಲಿಟ್ಟನು. ಈ ಖಡ್ಗವು ಎಲ್ಲಾ ದಿಕ್ಕುಗಳತ್ತ
ತಿರುಗುತ್ತಾ ಧಗಧಗನೆ ಪ್ರಜ್ವಲಿಸುತ್ತಾ ಜೀವದಾಯಕ
ಮರದ ಮಾರ್ಗವನ್ನು ಕಾಯುತ್ತಿತ್ತು.

**ಹವ್ವ** ಹೀಬ್ರೂ ಭಾಷೆಯಲ್ಲಿ ಈ ಪದಕ್ಕೆ ‘‘ಜೀವ’’ ಎಂಬರ್ಥವಿದೆ.

**ಕೆರೂಬಿದೂತರು** ದೇವರ ವಿಶೇಷ ದೂತರು; ಒಡಂಬಡಿಕೆ ಪೆಟ್ಟಿಗೆಯ ಮೇಲೆ ಈ ದೂತರುಗಳ ಪ್ರತಿಮೆಗಳಿದ್ದವು.

## ಮೊದಲನೆಯ ಕುಟುಂಬ

4 ಆದಾಮ ಮತ್ತು ಹವ್ವಳು ಕೂಡಿದರು. ಆದ್ದರಿಂದ
ಹವ್ವಳಿಗೆ ಒಂದು ಮಗು ಜನಿಸಿತು. ಹವ್ವಳು,
‘‘ಯೆಹೋವನ ಸಹಾಯದಿಂದ ಗಂಡುಮಗುವನ್ನು ಪಡೆ
ದಿದ್ದೇನೆ’’ ಎಂದು ಹೇಳಿ ಆ ಮಗುವಿಗೆ ಕಾಯಿನ* ಎಂದು
ಹೆಸರಿಟ್ಟಳು.

[2]ಆಮೇಲೆ, ಹವ್ವಳಿಗೆ ಮತ್ತೊಂದು ಮಗು ಜನಿಸಿತು.
ಈ ಮಗುವೇ ಕಾಯಿನನ ತಮ್ಮನಾದ ಹೇಬೆಲ.
ಹೇಬಲನು ಕುರುಬನಾದನು. ಕಾಯಿನನು ರೈತನಾದನು.

## ಮೊದಲನೆಯ ಕೊಲೆ

[3]ಸ್ವಲ್ಪ ಕಾಲದ ನಂತರ ಕಾಯಿನನು ದೇವರಿಗೆ ಕೃತಜ್ಞತಾ
ಕಾಣಿಕೆಯನ್ನು ತಂದನು. ಕಾಯಿನನು ತಾನು ಹೊಲದಲ್ಲಿ
ಬೆಳೆದ ಕೆಲವು ಆಹಾರಪದಾರ್ಥಗಳನ್ನು ತಂದನು. [4]ಹೇಬೆ
ಲನು ತನ್ನ ಕುರಿ ಮಂದೆಯಿಂದ ಒಳ್ಳೆಯ ಚೊಚ್ಚಲು ಕುರಿ
ಗಳನ್ನು ಮತ್ತು ಅವುಗಳ ಒಳ್ಳೆಯ ಕೊಬ್ಬಿದ ಭಾಗಗಳನ್ನು
ತಂದನು.

ಯೆಹೋವನು ಹೇಬೆಲನ ಕಾಣಿಕೆಯನ್ನು ಸ್ವೀಕರಿಸಿ
ದನು; [5]ಆದರೆ ಕಾಯಿನನ ಕಾಣಿಕೆಯನ್ನು ಸ್ವೀಕರಿಸಲಿಲ್ಲ.
ಇದರಿಂದ ಕಾಯಿನನು ದುಃಖಿತನಾದನು ಮತ್ತು ಬಹಳ
ಕೋಪಗೊಂಡನು. [6]ಯೆಹೋವನು ಕಾಯಿನನಿಗೆ, ‘‘ಏಕೆ
ಕೋಪಗೊಂಡಿರುವೆ? ನಿನ್ನ ಮುಖ ವ್ಯಸನದಿಂದಿರುವು
ದೇಕೆ? [7]ನೀನು ಒಳ್ಳೆಯಕಾರ್ಯಗಳನ್ನು ಮಾಡಿದರೆ ನನ್ನ
ಜೊತೆಯಲ್ಲಿ ಅನ್ಯೋನ್ಯವಾಗಿರುವೆ. ಆಗ ನಾನು ನಿನ್ನನ್ನು
ಸ್ವೀಕರಿಸಿಕೊಳ್ಳುವೆನು. ಆದರೆ ನೀನು ಕೆಟ್ಟಕಾರ್ಯಗ
ಳನ್ನು ಮಾಡಿದರೆ, ಆ ಪಾಪವು ನಿನ್ನೊಂದಿಗಿರುತ್ತದೆ. ನಿನ್ನ
ಪಾಪವು ನಿನ್ನನ್ನು ತನ್ನ ಹಿಡಿತದಲ್ಲಿಟ್ಟುಕೊಳ್ಳಲು ಇಷ್ಟ
ಪಡುತ್ತದೆ. ಆದರೆ ನೀನು ಆ ಪಾಪವನ್ನು ನಿನ್ನ ಹಿಡಿತದ
ಲ್ಲಿಟ್ಟುಕೊಳ್ಳಬೇಕು’’* ಎಂದು ಹೇಳಿದನು.

[8]ಕಾಯಿನನು ತನ್ನ ತಮ್ಮನಾದ ಹೇಬೆಲನಿಗೆ, ‘‘ನಾವು
ಹೊಲಕ್ಕೆ ಹೋಗೋಣ ಬಾ’’ ಎಂದು ಹೇಳಿದನು.

**ಕಾಯಿನ** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ ‘‘ನಿರ್ಮಿಸು’’ ಅಥವಾ ‘‘ಪಡೆದುಕೊ.’’

**ನೀನು ... ಕೊಳ್ಳಬೇಕು** ಅಥವಾ ‘‘ನೀನು ಒಳ್ಳೆಯದನ್ನು ಮಾಡದಿದ್ದರೆ ಪಾಪವು ಬಾಗಿಲ ಬಳಿಯಲ್ಲಿಯೇ ಹೊಂಚು ಹಾಕಿಕೊಂಡಿರುತ್ತದೆ. ಅದಕ್ಕೆ ನೀನು ಬೇಕಾಗಿರುವೆ. ಆದರೆ ನೀನು ಅದರ ಮೇಲೆ ದೊರೆತನ ಮಾಡಬೇಕು.’’

ಅಂತೆಯೇ ಕಾಯಿನನು ಮತ್ತು ಹೇಬೆಲನು ಹೊಲಕ್ಕೆ
ಹೋದರು. ಅಲ್ಲಿ ಕಾಯಿನನು ತನ್ನ ತಮ್ಮನ ಮೇಲೆರಗಿ
ಅವನನ್ನು ಕೊಂದುಹಾಕಿದನು.
[9]ತರುವಾಯ ಯೆಹೋವನು ಕಾಯಿನನಿಗೆ, ''ನಿನ್ನ
ತಮ್ಮನಾದ ಹೇಬೆಲನೆಲ್ಲಿ?'' ಎಂದು ಕೇಳಿದನು.

ಅದಕ್ಕೆ ಕಾಯಿನನು, ''ನನಗೆ ಗೊತ್ತಿಲ್ಲ. ನನ್ನ ತಮ್ಮನನ್ನು
ಕಾಯುವುದಾಗಲೀ ನೋಡಿಕೊಳ್ಳುವುದಾಗಲೀ ನನ್ನ
ಕೆಲಸವೇ?'' ಎಂದು ಉತ್ತರಕೊಟ್ಟನು.
[10]ಆದಕ್ಕೆ ಯೆಹೋವನು, ''ನೀನು ಮಾಡಿದ್ದೇನು?
ನೀನು ನಿನ್ನ ತಮ್ಮನನ್ನೇ ಕೊಲೆ ಮಾಡಿದೆ! ಅವನ ರಕ್ತವು
ಭೂಮಿಯಿಂದ ನನ್ನನ್ನು ಕೂಗುವ ಸ್ವರದಂತಿದೆ. [11]ನೀನು
ನಿನ್ನ ತಮ್ಮನನ್ನು ಕೊಂದುಹಾಕಿದೆ. ನಿನ್ನ ಕೈಗಳಿಂದ ಸುರಿ
ಸಿದ ಅವನ ರಕ್ತವನ್ನು ಕುಡಿಯಲು ಭೂಮಿಯು ಬಾಯಿ
ತೆರೆಯಿತು. ಈಗ ನೀನು ಅದರಿಂದ ಶಾಪಗ್ರಸ್ತನಾಗಿರುವೆ.
[12]ಕಳೆದ ದಿನಗಳಲ್ಲಿ ನೀನು ಸಸಿಗಳನ್ನು ನೆಟ್ಟಾಗ ಸಸಿಗಳು
ಚೆನ್ನಾಗಿ ಬೆಳೆದವು. ಆದರೆ ಈಗ ನೀನು ಸಸಿ ನೆಟ್ಟರೂ
ಭೂಮಿ ಫಲಿಸುವುದಿಲ್ಲ. ನಿನಗೆ ಭೂಮಿಯ ಮೇಲೆ ಮನೆ
ಇರುವುದಿಲ್ಲ. ನೀನು ಸ್ಥಳದಿಂದ ಸ್ಥಳಕ್ಕೆ ಅಲೆದಾಡುವೆ''
ಎಂದು ಹೇಳಿದನು.
[13]ಅದಕ್ಕೆ ಕಾಯಿನನು ಯೆಹೋವನಿಗೆ, ''ಈ ಶಿಕ್ಷೆ
ಯನ್ನು ನಾನು ಸಹಿಸಲಾರೆ! [14]ನೀನು ನನ್ನನ್ನು ನನ್ನ ದೇಶ
ದಿಂದ ಬಲವಂತವಾಗಿ ಹೊರಡಿಸುತ್ತಿರುವೆ. ನಿನ್ನನ್ನು
ನೋಡುವುದಕ್ಕಾಗಲೀ ನಿನ್ನ ಸಮೀಪದಲ್ಲಿ ಇರುವುದಕ್ಕಾ
ಗಲೀ ನನಗೆ ಸಾಧ್ಯವಿರುವುದಿಲ್ಲ! ನನಗೆ ಮನೆಯೂ ಇಲ್ಲ!
ನಾನು ಭೂಮಿಯ ಮೇಲೆ ಸ್ಥಳದಿಂದ ಸ್ಥಳಕ್ಕೆ ಬಲವಂತ
ವಾಗಿ ಅಲೆದಾಡಬೇಕಾಗುವುದು. ನನ್ನನ್ನು ಕಂಡವರು
ನನ್ನನ್ನು ಕೊಲುವರು'' ಎಂದು ಹೇಳಿದನು.
[15]ಅದಕ್ಕೆ ಯೆಹೋವನು ಕಾಯಿನನಿಗೆ, ''ಆ ರೀತಿ ಆಗ
ದಂತೆ ನಾನು ನೋಡಿಕೊಳ್ಳುವೆ! ಕಾಯಿನನೇ, ನಿನ್ನನ್ನು
ಯಾವನಾದರೂ ಕೊಂದರೆ, ನಾನು ಅವನನ್ನು ಏಳರಷ್ಟು
ಶಿಕ್ಷಿಸುವೆನು'' ಎಂದು ಹೇಳಿದನು. ಆಮೇಲೆ ಯೆಹೋ
ವನು ಕಾಯಿನನ ಮೇಲೆ ಒಂದು ಗುರುತಿಟ್ಟನು. ಅವನನ್ನು
ಯಾರೂ ಕೊಲ್ಲಕೂಡದೆಂದು ಆ ಗುರುತು
ಸೂಚಿಸುತ್ತಿತ್ತು.

### ಕಾಯಿನನ ಕುಟುಂಬ

[16]ಕಾಯಿನನು ಯೆಹೋವನ ಪ್ರಸನ್ನತೆಯಿಂದ ದೂರ
ಹೊರಟುಹೋದನು. ಕಾಯಿನನು ನೋದು* ಎಂಬ
ನಾಡಿನಲ್ಲಿ ವಾಸಿಸಿದನು.
[17]ಕಾಯಿನ ಮತ್ತು ಅವನ ಹೆಂಡತಿಗೆ ಒಂದು ಗಂಡು
ಮಗು ಹುಟ್ಟಿತು. ಅವರು ಆ ಮಗುವಿಗೆ ಹನೋಕ ಎಂದು
ಹೆಸರಿಟ್ಟರು. ಕಾಯಿನನು ಒಂದು ಊರನ್ನು ಕಟ್ಟಿದನು.
ಆ ಊರಿಗೆ ಅವನು ತನ್ನ ಮಗನ ಹೆಸರನ್ನೇ ಇಟ್ಟನು.
[18]ಹನೋಕನು ಈರಾದ್ ಎಂಬ ಮಗನನ್ನು ಪಡೆದನು.
ಈರಾದನು ಮೆಹೂಯಾಯೇಲ ಎಂಬ ಮಗನನ್ನು ಪಡೆ
ದನು. ಮೆಹೂಯಾಯೇಲನು ಮೆತೂಷಾಯೇಲ ಎಂಬ
ಮಗನನ್ನು ಪಡೆದನು. ಮೆತೂಷಾಯೇಲನು ಲೆಮೆಕ
ಎಂಬ ಮಗನನ್ನು ಪಡೆದನು.
[19]ಲೆಮೆಕನು ಇಬ್ಬರು ಹೆಂಗಸರನ್ನು ಮದುವೆ ಮಾಡಿ
ಕೊಂಡನು. ಮೊದಲನೆ ಹೆಂಡತಿಯ ಹೆಸರು ಆದಾ; ಎರ
ಡನೆ ಹೆಂಡತಿಯ ಹೆಸರು ಚಿಲ್ಲಾ. [20]ಆದಳಿಗೆ ಯಾಬಾಲ
ಎಂಬ ಮಗನು ಹುಟ್ಟಿದನು. ಗುಡಾರಗಳಲ್ಲಿದ್ದು
ಕೊಂಡು, ಪಶುಗಳನ್ನು ಸಾಕಿಕೊಂಡು ಜೀವನ ಮಾಡು
ತ್ತಿದ್ದ ಜನರಿಗೆ ಯಾಬಾಲನೇ ಮೂಲ ಪಿತೃ. [21]ಆದಳಿಗೆ
ಮತ್ತೊಬ್ಬ ಮಗ ಹುಟ್ಟಿದನು. ಅವನೇ ಯೂಬಾಲ. ಕಿನ್ನರಿ
ಕೊಳಲುಗಳನ್ನು ನುಡಿಸುವ ಜನರಿಗೆ ಯೂಬಾಲನೇ
ಮೂಲ ಪಿತೃ.
[22]ಚಿಲ್ಲಾಳಿಗೆ ತೂಬಲ್ ಕಾಯಿನ ಎಂಬ ಮಗನು
ಹುಟ್ಟಿದನು. ಕಬ್ಬಿಣ ಮತ್ತು ತಾಮ್ರಗಳಿಂದ ಉಪಕರಣ
ಮಾಡುತ್ತಿದ್ದವರಿಗೆ ತೂಬಲ್ ಕಾಯಿನನೇ ಮೂಲ ಪಿತೃ.
ತೂಬಲ್ ಕಾಯಿನನ ತಂಗಿ ನಯಮಾ.

[23]ಲೆಮೆಕನು ತನ್ನ ಹೆಂಡತಿಯರಿಗೆ ಹೀಗಂದನು:

''ಆದಾ, ಚಿಲ್ಲಾ, ನನ್ನ ಮಾತನ್ನು ಕೇಳಿ! ಲೆಮೆಕನ
ಹೆಂಡತಿಯರೇ, ನಾನು ಹೇಳುವುದನ್ನು ಕೇಳಿ.
ಒಬ್ಬನು ನನಗೆ ಗಾಯ ಮಾಡಿದ, ಆದ್ದರಿಂದ
ನಾನು ಅವನನ್ನು ಕೊಂದೆ, ಒಬ್ಬ ಯುವಕನು
ನನ್ನನ್ನು ಹೊಡೆದ, ಆದ್ದರಿಂದ ನಾನು ಅವನನ್ನು
ಕೊಂದೆ.
24 ಕಾಯಿನನನ್ನು ಕೊಂದವರಿಗೆ ಏಳರಷ್ಟು ಶಿಕ್ಷೆ
ಯಾಗುವುದು! ಆದ್ದರಿಂದ ನನ್ನನ್ನು ಕೊಂದ
ವರಿಗೆ ಎಪ್ಪತ್ತೇಳರಷ್ಟು ಶಿಕ್ಷೆಯಾಗುವುದು!''

### ಸೇತ ಮತ್ತು ಎನೋಷ್

[25]ಆದಾಮ ಮತ್ತು ಹವ್ವಳಿಗೆ ಮತ್ತೊಬ್ಬ ಮಗ ಹುಟ್ಟಿ
ದನು. ಹವ್ವಳು, ''ದೇವರು ನನಗೆ ಮತ್ತೊಬ್ಬ ಮಗನನ್ನು
ಕೊಟ್ಟನು. ಕಾಯಿನನು ಕೊಂದ ಹೇಬೆಲನಿಗೆ ಬದಲಾಗಿ
ದೇವರು ನನಗೆ ಗಂಡುಮಗುವನ್ನು ಕೊಟ್ಟನು'' ಎಂದು
ಹೇಳಿ ಆ ಮಗುವಿಗೆ ಸೇತ* ಎಂದು ಹೆಸರಿಟ್ಟಳು.
[26]ಸೇತನು ಒಬ್ಬ ಮಗನನ್ನು ಪಡೆದನು. ಆ ಮಗುವಿಗೆ
ಅವನು ಎನೋಷ್ ಎಂದು ಹೆಸರಿಟ್ಟನು. ಆ ಕಾಲದಲ್ಲಿ

**ನೋದು** ಇದರರ್ಥ ''ಅಲೆಮಾರಿ.''

**ಸೇತ** ಹೀಬ್ರೂ ಭಾಷೆಯಲ್ಲಿ ಈ ಪದಕ್ಕೆ ''ಕೊಡು'' ಎಂಬರ್ಥವಿದೆ.

ಜನರು ಯೆಹೋವನ ಮೇಲೆ ಭರವಸೆ ಇಡ
ಲಾರಂಭಿಸಿದರು.*

### ಆದಾಮನ ಕುಟುಂಬ ಚರಿತ್ರೆ

5 ಇದು ಆದಾಮನ ಕುಟುಂಬ ಚರಿತ್ರೆ. ದೇವರು
ಮನುಷ್ಯನನ್ನು ತನ್ನ ಹೋಲಿಕೆಗೆ ಸರಿಯಾಗಿ ಸೃಷ್ಟಿ
ಮಾಡಿದನು. [2]ದೇವರು ಅವರನ್ನು ಗಂಡಾಗಿ ಮತ್ತು
ಹೆಣ್ಣಾಗಿ ನಿರ್ಮಿಸಿದನು. ಆತನು ಅವರನ್ನು ನಿರ್ಮಿಸಿದ
ದಿನದಲ್ಲೇ ಅವರನ್ನು ಆಶೀರ್ವದಿಸಿ ಅವರಿಗೆ,
''ಮನುಷ್ಯ'' ಎಂದು ಹೆಸರಿಟ್ಟನು.

[3]ಆದಾಮನು ನೂರಮೂವತ್ತು ವರ್ಷದವನಾದಾಗ
ಮತ್ತೊಬ್ಬ ಮಗನನ್ನು ಪಡೆದನು. ಆ ಮಗನು ರೂಪದಲ್ಲಿ
ಆದಾಮನಂತಿದ್ದನು. ಆದಾಮನು ಅವನಿಗೆ ಸೇತ ಎಂದು
ಹೆಸರಿಟ್ಟನು. [4]ಸೇತನು ಹುಟ್ಟಿದ ಮೇಲೆ ಆದಾಮನು
ಎಂಟುನೂರು ವರ್ಷ ಜೀವಿಸಿದನು. ಆ ಕಾಲಾವಧಿಯಲ್ಲಿ
ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
[5]ಹೀಗೆ ಆದಾಮನು ಒಟ್ಟು ಒಂಭೈನೂರ ಮೂವತ್ತು ವರ್ಷ
ಜೀವಿಸಿ ಮರಣ ಹೊಂದಿದನು.

[6]ಸೇತನು ನೂರ ಐದು ವರ್ಷದವನಾದಾಗ ಎನೋಷ್
ಎಂಬ ಮಗನನ್ನು ಪಡೆದನು. [7]ಎನೋಷನು ಹುಟ್ಟಿದ
ಮೇಲೆ, ಸೇತನು ಎಂಟುನೂರ ಏಳು ವರ್ಷ ಜೀವಿಸಿದನು.
ಆ ಕಾಲಾವಧಿಯಲ್ಲಿ ಸೇತನು ಇತರ ಗಂಡು ಮತ್ತು ಹೆಣ್ಣು
ಮಕ್ಕಳನ್ನು ಪಡೆದನು. [8]ಹೀಗೆ ಸೇತನು ಒಟ್ಟು ಒಂಭೈ
ನೂರ ಹನ್ನೆರಡು ವರ್ಷ ಜೀವಿಸಿ ಮರಣ ಹೊಂದಿದನು.

[9]ಎನೋಷನು ತೊಂಭತ್ತು ವರ್ಷದವನಾದಾಗ
ಕೇನಾನ ಎಂಬ ಮಗನನ್ನು ಪಡೆದನು. [10]ಕೇನಾನನು
ಹುಟ್ಟಿದ ಮೇಲೆ ಎನೋಷನು ಎಂಟುನೂರ ಹದಿನೈದು
ವರ್ಷ ಜೀವಿಸಿದನು. ಆ ಕಾಲಾವಧಿಯಲ್ಲಿ ಅವನು ಬೇರೆ
ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು. [11]ಹೀಗೆ
ಎನೋಷನು ಒಟ್ಟು ಒಂಭೈನೂರ ಐದು ವರ್ಷ ಜೀವಿಸಿ
ಮರಣ ಹೊಂದಿದನು.

[12]ಕೇನಾನನು ಎಪ್ಪತ್ತು ವರ್ಷದವನಾದಾಗ ಅವನು
ಮಹಲಲೇಲ ಎಂಬ ಮಗನನ್ನು ಪಡೆದನು. [13]ಮಹಲ
ಲೇಲನು ಹುಟ್ಟಿದ ಮೇಲೆ ಕೇನಾನನು ಎಂಟುನೂರ ನಲ
ವತ್ತು ವರ್ಷ ಜೀವಿಸಿದನು. ಆ ಕಾಲಾವಧಿಯಲ್ಲಿ ಕೇನಾ
ನನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
[14]ಹೀಗೆ ಕೇನಾನನು ಒಟ್ಟು ಒಂಭೈನೂರ ಹತ್ತು ವರ್ಷ
ಜೀವಿಸಿ ಮರಣ ಹೊಂದಿದನು.

[15]ಮಹಲಲೇಲನು ಅರವತ್ತೈದು ವರ್ಷದವನಾದಾಗ
ಯೆರೆದ ಎಂಬ ಮಗನನ್ನು ಪಡೆದನು. [16]ಯೆರೆದನು
ಹುಟ್ಟಿದ ಮೇಲೆ ಮಹಲಲೇಲನು ಎಂಟುನೂರ
ಮೂವತ್ತು ವರ್ಷ ಜೀವಿಸಿದನು. ಆ ಕಾಲಾವಧಿಯಲ್ಲಿ
ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
[17]ಹೀಗೆ ಮಹಲಲೇಲನು ಒಟ್ಟು ಎಂಟುನೂರ ತೊಂಭ
ತ್ತೈದು ವರ್ಷ ಜೀವಿಸಿ ಮರಣ ಹೊಂದಿದನು.

[18]ಯೆರೆದನು ನೂರಅರವತ್ತೆರಡು ವರ್ಷದವನಾದಾಗ
ಹನೋಕ ಎಂಬ ಮಗನನ್ನು ಪಡೆದನು. [19]ಹನೋಕನು
ಹುಟ್ಟಿದ ಮೇಲೆ ಯೆರೆದನು ಎಂಟುನೂರು ವರ್ಷ ಜೀವಿ
ಸಿದನು. ಆ ಕಾಲಾವಧಿಯಲ್ಲಿ ಅವನು ಇತರ ಗಂಡು ಮತ್ತು
ಹೆಣ್ಣು ಮಕ್ಕಳನ್ನು ಪಡೆದನು. [20]ಹೀಗೆ ಯೆರೆದನು ಒಟ್ಟು
ಒಂಭೈನೂರ ಅರವತ್ತೆರಡು ವರ್ಷ ಜೀವಿಸಿ ಮರಣ
ಹೊಂದಿದನು.

[21]ಹನೋಕನು ಅರವತ್ತೈದು ವರ್ಷದವನಾದಾಗ
ಮೆತೂಷೆಲಹ ಎಂಬ ಮಗನನ್ನು ಪಡೆದನು. [22]ಮೆತೂಷೆಲ
ಹನು ಹುಟ್ಟಿದ ಮೇಲೆ ಹನೋಕನು ದೇವರ ಅನ್ಯೋನ್ಯತೆ
ಯಲ್ಲಿ ಮುನ್ನೂರು ವರ್ಷ ಜೀವಿಸಿದನು. ಆ ಕಾಲಾವಧಿ
ಯಲ್ಲಿ ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು
ಪಡೆದನು.

[23]ಹೀಗೆ ಹನೋಕನು ಒಟ್ಟು ಮುನ್ನೂರ ಅರವತ್ತೈದು
ವರ್ಷ ಜೀವಿಸಿದನು. [24]ಹನೋಕನು ದೇವರ ಅನ್ಯೋನ್ಯ
ತೆಯಲ್ಲಿ ಜೀವಿಸುತ್ತಿದ್ದಾಗ, ದೇವರು ಅವನನ್ನು ತನ್ನ
ಬಳಿಗೆ ಕರೆದುಕೊಂಡನು. ಅಂದಿನಿಂದ ಅವನು ಕಣ್ಮರೆ
ಯಾದನು.

[25]ಮೆತೂಷೆಲಹನು ನೂರಎಂಭತ್ತೇಳು ವರ್ಷದವನಾ
ದಾಗ ಲೆಮೆಕ ಎಂಬ ಮಗನನ್ನು ಪಡೆದನು. [26]ಲೆಮೆಕನು
ಹುಟ್ಟಿದ ಮೇಲೆ ಮೆತೂಷೆಲಹನು ಏಳನೂರ ಎಂಭ
ತ್ತೆರಡು ವರ್ಷ ಜೀವಿಸಿದನು. ಆ ಕಾಲಾವಧಿಯಲ್ಲಿ ಅವನು
ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
[27]ಹೀಗೆ ಮೆತೂಷೆಲಹನು ಒಟ್ಟು ಒಂಭೈನೂರ ಅರವ
ತ್ತೊಂಭತ್ತು ವರ್ಷ ಜೀವಿಸಿ ಮರಣ ಹೊಂದಿದನು.

[28]ಲೆಮೆಕನು ನೂರ ಎಂಭತ್ತೆರಡು ವರ್ಷದವನಾದಾಗ
ಒಬ್ಬ ಮಗನನ್ನುಪಡೆದನು. [29]ಲೆಮೆಕನು, ''ನಾವು ರೈತ
ರಾಗಿ ಕಷ್ಟಪಟ್ಟು ಕೆಲಸ ಮಾಡುತ್ತೇವೆ, ಯಾಕಂದರೆ
ದೇವರು ಭೂಮಿಯನ್ನು ಶಪಿಸಿದನು. ಆದರೆ ಈ ಮಗನು
ನಮಗೆ ವಿಶ್ರಾಂತಿ ಕೊಡುವನು'' ಎಂದು ಹೇಳಿ ಆ ಮಗು
ವಿಗೆ ನೋಹ* ಎಂದು ಹೆಸರಿಟ್ಟನು.

[30]ನೋಹನು ಹುಟ್ಟಿದ ಮೇಲೆ, ಲೆಮೆಕನು ಐನೂರ
ತೊಂಭತ್ತೈದು ವರ್ಷ ಜೀವಿಸಿದನು. ಆ ಕಾಲದಲ್ಲಿ ಅವನು
ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
[31]ಹೀಗೆ ಲೆಮೆಕನು ಒಟ್ಟು ಏಳನೂರ ಎಪ್ಪತ್ತೇಳು ವರ್ಷ
ಜೀವಿಸಿ ಮರಣಹೊಂದಿದನು.

---

**ಜನರು ... ಇಡಲಾರಂಭಿಸಿದರು** ಅಕ್ಷರಶಃ ''ಜನರು ದೇವರನ್ನು ಯೆಹೋವ ಎಂದು ಕರೆಯಲಾರಂಭಿಸಿದರು.''

**ನೋಹ** ಇದರರ್ಥ ''ವಿಶ್ರಾಂತಿ.''

[32]ನೋಹನು ಐನೂರು ವರ್ಷದವನಾದಾಗ ಶೇಮ್,
ಹಾಮ್, ಯೆಫೆತ್ ಎಂಬ ಮೂವರು ಗಂಡುಮಕ್ಕಳನ್ನು
ಪಡೆದನು.

## ಜನರ ದುಷ್ಟತನ

6 ಭೂಮಿಯಲ್ಲಿ ಜನಸಂಖ್ಯೆಯು ಹೆಚ್ಚುತ್ತಲೇ ಇತ್ತು.
ಅವರಿಗೆ ಸುಂದರವಾದ ಹೆಣ್ಣುಮಕ್ಕಳು ಹುಟ್ಟಿದ್ದರು.
[2-4]ಈ ಹುಡುಗಿಯರ ಸೌಂದರ್ಯವನ್ನು ಕಂಡ ದೇವ
ಪುತ್ರರು ತಮಗೆ ಬೇಕಾದ ಹುಡುಗಿಯರನ್ನು ಆರಿಸಿ
ಕೊಂಡು ಮದುವೆಯಾದರು.

ಈ ಸ್ತ್ರೀಯರು ಮಕ್ಕಳನ್ನು ಹೆತ್ತರು. ಆ ಕಾಲದಲ್ಲಿ ಮತ್ತು
ಆ ಕಾಲದನಂತರ ನೆಫೀಲಿಯರು* ಆ ನಾಡಿನಲ್ಲಿ ವಾಸ
ವಾಗಿದ್ದರು. ಅವರು ಪ್ರಸಿದ್ಧವಾಗಿದ್ದರು. ಪುರಾತನ ಕಾಲ
ದಿಂದ ವೀರರಾಗಿದ್ದರು.*

ಬಳಿಕ ಯೆಹೋವನು, ‘‘ಜನರು ಮಾನವರೇ ಸರಿ; ನನ್ನ
ಆತ್ಮವು ಅವರಿಂದ ಯಾವಾಗಲೂ ತೊಂದರೆಗೆ ಗುರಿ
ಯಾಗಕೂಡದು. ಅವರು ನೂರ ಇಪ್ಪತ್ತು ವರ್ಷ ಬದುಕು
ವಂತೆ ಮಾಡುವೆನು’’ ಅಂದುಕೊಂಡನು.

[5]ಭೂಮಿಯ ಮೇಲಿರುವ ಜನರು ತುಂಬ ದುಷ್ಟ
ರಾಗಿದ್ದು ಯಾವಾಗಲೂ ಕೆಟ್ಟವಿಷಯಗಳ ಬಗ್ಗೆ ಆಲೋ
ಚಿಸುತ್ತಿರುವುದನ್ನು ಯೆಹೋವನು ನೋಡಿದನು.
[6]ಭೂಮಿಯ ಮೇಲೆ ತಾನು ಮನುಷ್ಯರನ್ನು ಸೃಷ್ಟಿಸಿದ್ದಕ್ಕಾಗಿ
ಯೆಹೋವನು ದುಃಖಪಟ್ಟು ತನ್ನ ಹೃದಯದಲ್ಲಿ ನೊಂದು
ಕೊಂಡನು.

[7]ಆದ್ದರಿಂದ ಯೆಹೋವನು, ‘‘ನಾನು ಸೃಷ್ಟಿಸಿದ ಜನ
ರನ್ನೆಲ್ಲ ಭೂಮುಖದಿಂದ ನಾಶ ಮಾಡುವೆನು. ಪ್ರತಿ
ಯೊಬ್ಬ ಮನುಷ್ಯನನ್ನೂ ಪ್ರತಿಯೊಂದು ಪ್ರಾಣಿಯನ್ನೂ
ನೆಲದ ಮೇಲೆ ಹರಿದಾಡುವ ಪ್ರತಿಯೊಂದು ಜಂತುವನ್ನೂ
ಆಕಾಶದಲ್ಲಿ ಹಾರಾಡುವ ಪಕ್ಷಿಗಳನ್ನೂ ನಾಶಮಾಡು
ವೆನು. ಇವುಗಳನ್ನೆಲ್ಲಾ ಸೃಷ್ಟಿಸಿದ್ದರಿಂದ ನನಗೆ ದುಃಖ
ವಾಯಿತು’’ ಅಂದುಕೊಂಡನು.

[8]ಆದರೆ ಯೆಹೋವನಿಗೆ ಮೆಚ್ಚಿಕೆಯಾಗುವಂತೆ ನಡೆದು
ಕೊಂಡ ಒಬ್ಬ ಮನುಷ್ಯನಿದ್ದನು. ಅವನೇ ನೋಹ.

## ನೋಹ ಮತ್ತು ಮಹಾ ಜಲಪ್ರಳಯ

[9]ಇದು ನೋಹನ* ಚರಿತ್ರೆ. ನೋಹನು ತನ್ನ ಜೀವ
ಮಾನವೆಲ್ಲಾ ನೀತಿವಂತನೂ ಒಳ್ಳೆಯವನೂ ಆಗಿದ್ದನು.
ನೋಹನು ಯಾವಾಗಲೂ ದೇವರನ್ನು ಅನುಸರಿಸಿದ್ದನು.
[10]ನೋಹನಿಗೆ ಮೂವರು ಗಂಡುಮಕ್ಕಳಿದ್ದರು: ಶೇಮ್,
ಹಾಮ್, ಯೆಫೆತ್.

[11-12]ದೇವರು ಭೂಮಿಯ ಕಡೆಗೆ ನೋಡಿದಾಗ ಜನ
ರಿಂದ ಅದು ಕೆಟ್ಟುಹೋಗಿರುವುದನ್ನು ಕಂಡನು.
ಎಲ್ಲೆಲ್ಲೂ ಹಿಂಸೆ ತುಂಬಿಕೊಂಡಿತ್ತು; ಜನರು ದುಷ್ಟರಾ
ಗಿಯೂ ಕ್ರೂರಿಗಳಾಗಿಯೂ ತಮ್ಮ ಜೀವಿತವನ್ನು ಕೆಡಿಸಿ
ಕೊಂಡಿದ್ದರು.

[13]ಆದ್ದರಿಂದ ದೇವರು ನೋಹನಿಗೆ, ‘‘ನಾನು ಎಲ್ಲಾ
ಜನರಿಗೂ ಅಂತ್ಯವನ್ನು ಬರಮಾಡಬೇಕೆಂದಿದ್ದೇನೆ;
ಯಾಕಂದರೆ ಅವರು ಕೋಪ, ಹಿಂಸೆಗಳಿಂದ ಭೂಮಿ
ಯನ್ನು ತುಂಬಿಸಿದ್ದಾರೆ. ಆದಕಾರಣ ನಾನು ಎಲ್ಲಾ ಜೀವಿ
ಗಳನ್ನು ನಾಶಮಾಡುವೆನು. [14]ನಿನಗೋಸ್ಕರ ಒಂದು ನಾವೆ
ಯನ್ನು ತುರಾಯಿಮರದಿಂದ ತಯಾರಿಸು. ಆ ನಾವೆ
ಯಲ್ಲಿ ಕೋಣೆಗಳನ್ನು ಮಾಡು. ಇಡೀ ನಾವೆಗೆ ಒಳಭಾಗ
ದಲ್ಲೂ ಹೊರಭಾಗದಲ್ಲೂ ರಾಳವನ್ನು ಹಚ್ಚು.

[15]‘‘ನೀನು ತಯಾರಿಸುವ ನಾವೆಯು ನಾನೂರೈವತ್ತು
ಅಡಿ ಉದ್ದವಾಗಿಯೂ ಎಪ್ಪತ್ತೈದು ಅಡಿ ಅಗಲವಾಗಿಯೂ
ನಲವತ್ತೈದು ಅಡಿ ಎತ್ತರವಾಗಿಯೂ ಇರಬೇಕು. [16]ಕಿಟ
ಕಿಯ ಮೇಲ್ಛಾವಣಿಗೆ ಹದಿನೆಂಟು ಇಂಚು ಕೆಳಗಿರಲಿ.
ನಾವೆಯ ಪಾರ್ಶ್ವದಲ್ಲಿ ಬಾಗಿಲಿರಲಿ. ನಾವೆಯಲ್ಲಿ
ಮೇಲಂತಸ್ತು ಮಧ್ಯಂತಸ್ತು ಮತ್ತು ಕೆಳಂತಸ್ತು ಎಂಬ
ಮೂರು ಅಂತಸ್ತುಗಳಿರಲಿ.

[17]‘‘ನಾನು ನಿನಗೆ ಹೇಳುತ್ತಿರುವುದನ್ನು ಅರ್ಥ
ಮಾಡಿಕೊ. ನಾನು ಭೂಮಿಯ ಮೇಲೆ ಮಹಾ ಜಲ
ಪ್ರಳಯವನ್ನು ತರುವೆನು. ಆಕಾಶದ ಕೆಳಗಿರುವ ಎಲ್ಲಾ
ಜೀವಿಗಳನ್ನು ನಾಶಮಾಡುವೆನು. ಭೂಮಿಯ ಮೇಲಿ
ರುವ ಪ್ರತಿಯೊಂದೂ ಸಾಯುವುದು. [18]ನಾನು ನಿನ್ನೊಂ
ದಿಗೆ ವಿಶೇಷ ಒಡಂಬಡಿಕೆಯನ್ನು ಮಾಡಿಕೊಳ್ಳುವೆ. ಅದೇ
ನಂದರೆ, ನೀನು ಮತ್ತು ನಿನ್ನ ಹೆಂಡತಿ, ನಿನ್ನ ಗಂಡು
ಮಕ್ಕಳು ಮತ್ತು ಸೊಸೆಯಂದಿರು ನಾವೆಯೊಳಗೆ ಹೋಗು
ವಿರಿ. [19]ಇದಲ್ಲದೆ, ಭೂಮಿಯ ಮೇಲೆ ಇರುವ ಪ್ರತಿ
ಯೊಂದು ಜೀವಿಯಲ್ಲಿ ಒಂದು ಗಂಡನ್ನೂ ಒಂದು
ಹೆಣ್ಣನ್ನೂ ನಾವೆಯೊಳಗೆ ಸೇರಿಸಿಕೋ. ನಿನ್ನೊಡನೆ ಅವು
ಗಳನ್ನು ಜೀವದಿಂದುಳಿಸಿ ಕಾಪಾಡು. [20]ಭೂಮಿಯ
ಮೇಲಿರುವ ಪ್ರತಿಯೊಂದು ಬಗೆಯ ಪಕ್ಷಿಯಲ್ಲಿ ಎರಡೆ
ರಡೂ ಪ್ರತಿಯೊಂದು ಪ್ರಾಣಿಗಳಲ್ಲಿ ಎರಡೆರಡೂ ಮತ್ತು
ಭೂಮಿಯ ಮೇಲೆ ಹರಿದಾಡುವ ಪ್ರತಿಯೊಂದು

---

**ನೆಫೀಲಿಯರು** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ ‘‘ಬಿದ್ದು ಹೋದ ಜನರು’’ ಬಳಿಕ ನೆಫೀಲಿಮ್ ಕುಟುಂಬವು ಅನೇಕ ವೀರರನ್ನು ಒಳಗೊಂಡ ಪ್ರಸಿದ್ಧ ಕುಟುಂಬವಾಗಿತ್ತು. ನೋಡಿ: ಅರಣ್ಯಕಾಂಡ 13:32-33.

**ಈ ಸ್ತ್ರೀಯರು … ವೀರರಾಗಿದ್ದರು.** ಅಥವಾ, ‘‘ದೇವಪುತ್ರರು ಮಾನವರ ಪುತ್ರಿಯರನ್ನು ಮದುವೆಮಾಡಿಕೊಂಡ ಆ ದಿನಗಳಲ್ಲಿಯೂ ಅನಂತರವೂ ನೆಫೀಲಿಯರು ನಾಡಿನಲ್ಲಿ ವಾಸವಾಗಿದ್ದರು. ಈ ಸ್ತ್ರೀಯರೇ ಪುರಾತನ ಕಾಲದಿಂದಲೂ ಪ್ರಖ್ಯಾತರಾದ ವೀರರಿಗೆ ಜನ್ಮ ಕೊಟ್ಟವರು.’’

**ನೋಹ** ಈ ಹೆಸರಿನ ಅರ್ಥ ‘‘ವಿಶ್ರಾಂತಿ.’’

ಜಂತುವಿನಲ್ಲಿ ಎರಡೆರಡೂ ತಮ್ಮ ಪ್ರಾಣಗಳನ್ನು ಉಳಿಸಿ
ಕೊಳ್ಳುವುದಕ್ಕಾಗಿ ನಿನ್ನ ಬಳಿಗೆ ಬರುತ್ತವೆ. 21ಭೂಮಿಯ
ಮೇಲೆ ದೊರೆಯುವ ಎಲ್ಲಾ ಬಗೆಯ ಆಹಾರವನ್ನು ನಿಮ
ಗಾಗಿಯೂ ಮತ್ತು ಪ್ರಾಣಿಗಳಿಗಾಗಿಯೂ ನಾವೆಯಲ್ಲಿ
ತುಂಬಿಸಿಕೋ'' ಎಂದು ಹೇಳಿದನು. 22ದೇವರು ಆಜ್ಞಾಪಿ
ಸಿದಂತೆಯೇ ನೋಹನು ಮಾಡಿದನು.

## ಜಲಪ್ರಳಯದ ಪ್ರಾರಂಭ

7 ಆಮೇಲೆ ಯೆಹೋವನು ನೋಹನಿಗೆ, ``ಈ ಕಾಲ
ದವರಲ್ಲಿ ನೀನೊಬ್ಬನೇ ನೀತಿವಂತನಾಗಿರುವೆ. ಆದ್ದ
ರಿಂದ ನಿನ್ನ ಕುಟುಂಬದವರೆಲ್ಲರನ್ನು ಕರೆದುಕೊಂಡು
ನಾವೆಯೊಳಗೆ ಹೋಗು. 2ಎಲ್ಲಾ ಬಗೆಯ ಶುದ್ಧ ಪ್ರಾಣಿ
ಗಳಲ್ಲಿ* ಏಳೇಳು ಜೋಡಿಗಳನ್ನು (ಏಳು ಗಂಡನ್ನು
ಮತ್ತು ಏಳುಹೆಣ್ಣನ್ನು) ತೆಗೆದುಕೋ. ಭೂಮಿಯ
ಮೇಲಿನ ಇತರ ಪ್ರಾಣಿಗಳಲ್ಲಿ ಒಂದೊಂದು ಜೋಡಿ
ಯನ್ನು (ಒಂದು ಗಂಡನ್ನು ಮತ್ತು ಒಂದು ಹೆಣ್ಣನ್ನು)
ತೆಗೆದುಕೋ. 3ಎಲ್ಲಾ ಬಗೆಯ ಪಕ್ಷಿಗಳಲ್ಲಿ ಏಳೇಳು
ಜೋಡಿಗಳನ್ನು (ಏಳು ಗಂಡನ್ನು ಮತ್ತು ಏಳು ಹೆಣ್ಣನ್ನು)
ತೆಗೆದುಕೋ. ಉಳಿದ ಜೀವಿಗಳೆಲ್ಲ ನಾಶವಾದ ಮೇಲೆ,
ಇವು ತಮ್ಮ ಸಂತತಿಗಳನ್ನು ಮುಂದುವರಿಸಲಿ. 4ಏಳು ದಿನ
ಗಳ ನಂತರ ನಾನು ದೊಡ್ಡ ಮಳೆಯನ್ನು ಭೂಮಿಯ
ಮೇಲೆ ಸುರಿಸುವೆನು. ಈ ಮಳೆಯು ನಲವತ್ತು ಹಗಲು,
ನಲವತ್ತು ರಾತ್ರಿ ಸುರಿಯುವುದು. ನಾನು ನಿರ್ಮಿಸಿದ ಪ್ರತಿ
ಯೊಂದು ಜೀವಿಯನ್ನೂ ನಾನು ಭೂಮಿಯ ಮೇಲಿಂದ
ಅಳಿಸಿಬಿಡುವೆನು'' ಎಂದು ಹೇಳಿದನು. 5ಯೆಹೋವನು
ಆಜ್ಞಾಪಿಸಿದ್ದನ್ನೆಲ್ಲ ನೋಹನು ಮಾಡಿದನು.

6ಮಳೆಯು ಆರಂಭವಾದಾಗ ನೋಹನ ವಯಸ್ಸು
ಆರುನೂರು ವರ್ಷ. 7ಜಲಪ್ರಳಯದಿಂದ ತಪ್ಪಿಸಿಕೊಳ್ಳಲು
ನೋಹನು ತನ್ನ ಹೆಂಡತಿ, ತನ್ನ ಗಂಡು ಮಕ್ಕಳು ಮತ್ತು
ಸೊಸೆಯರೊಂದಿಗೆ ನಾವೆಯೊಳಗೆ ಹೋದನು. 8ಎಲ್ಲಾ
ಶುದ್ಧಪ್ರಾಣಿಗಳು, ಭೂಮಿಯ ಮೇಲಿರುವ ಇತರ ಎಲ್ಲಾ
ಪ್ರಾಣಿಗಳು, ಪಕ್ಷಿಗಳು ಮತ್ತು ಭೂಮಿಯ ಮೇಲೆ ಹರಿ
ದಾಡುವ ಪ್ರತಿಯೊಂದೂ 9ನೋಹನೊಂದಿಗೆ ನಾವೆ
ಯೊಳಗೆ ಹೋದವು. ದೇವರ ಆಜ್ಞೆಯಂತೆ ಈ ಪ್ರಾಣಿಗಳು
ಜೋಡಿಜೋಡಿಯಾಗಿ ನಾವೆಯೊಳಗೆ ಹೋದವು.
10ಏಳು ದಿನಗಳನಂತರ ಜಲಪ್ರಳಯ ಪ್ರಾರಂಭವಾ
ಯಿತು. ಭೂಮಿಯ ಮೇಲೆ ಮಳೆ ಸುರಿಯ ತೊಡಗಿತು.

11-13ಎರಡನೆ ತಿಂಗಳಿನ ಹದಿನೇಳನೆಯ ದಿನದಂದು
ಭೂಮಿಯ ಕೆಳಗಿರುವ ಸಾಗರದ ಸೆಲೆಗಳು ಒಡೆದು
ಭೂಮಿಯೊಳಗಿಂದ ನೀರು ಮೇಲೇರತೊಡಗಿತು;
ಭೂಮಿಯ ಮೇಲೆ ಭಾರಿಮಳೆ ಸುರಿಯತೊಡಗಿತು.
ಆಕಾಶದ ಕಿಟಕಿ ತೆರೆದಿದೆಯೋ ಎಂಬಂತೆ ನಲವತ್ತು
ಹಗಲು, ನಲವತ್ತು ರಾತ್ರಿ ಮಳೆ ಸುರಿಯಿತು. ಆ ದಿನ
ದಂದು ನೋಹ ಮತ್ತು ಅವನ ಹೆಂಡತಿ, ಅವನ ಗಂಡು
ಮಕ್ಕಳಾದ ಶೇಮ್, ಹಾಮ್, ಯೆಫೆತ್ ಮತ್ತು ಅವನ
ಸೊಸೆಯಂದಿರು ನಾವೆಯೊಳಗೆ ಹೋದರು. ಆಗ
ನೋಹನು ಆರುನೂರು ವರ್ಷದ ವೃದ್ಧನಾಗಿದ್ದನು.
14ಅವರು ನಾವೆಯೊಳಗೆ ಇದ್ದರು ಮತ್ತು ಭೂಮಿಯ
ಮೇಲಿರುವ ಪ್ರತಿಯೊಂದು ಬಗೆಯ ಪ್ರಾಣಿಗಳು ನಾವೆ
ಯೊಳಗೆ ಇದ್ದವು. ಪ್ರತಿಯೊಂದು ಬಗೆಯ ಪಶು,
ಭೂಮಿಯ ಮೇಲೆ ಹರಿದಾಡುವ ಪ್ರತಿಯೊಂದು ಬಗೆಯ
ಕ್ರಿಮಿ ಮತ್ತು ಪ್ರತಿಯೊಂದು ಬಗೆಯ ಪಕ್ಷಿ ನಾವೆಯೊಳಗೆ
ಇದ್ದವು. 15ಈ ಪ್ರಾಣಿಗಳೆಲ್ಲ ನೋಹನೊಂದಿಗೆ ನಾವೆ
ಯೊಳಗೆ ಹೋದವು. ಉಸಿರಾಡುವ ಪ್ರತಿಯೊಂದು
ಬಗೆಯ ಪ್ರಾಣಿಗಳು ಎರಡೆರಡಾಗಿ ಬಂದವು. 16ದೇವರ
ಆಜ್ಞೆಯಂತೆ ಈ ಪ್ರಾಣಿಗಳೆಲ್ಲಾ ನಾವಯೊಳಗೆ ಪ್ರವೇಶಿ
ಸಿದವು. ಆಗ ಯೆಹೋವನು ನಾವೆಯ ಬಾಗಿಲನ್ನು
ಮುಚ್ಚಿದನು.

17ಭೂಮಿಯ ಮೇಲೆ ಜಲಪ್ರಳಯವು ನಲವತ್ತು ದಿನ
ಗಳವರೆಗೆ ಇತ್ತು. ನೀರು ಮೇಲೇರುತ್ತಾ ನಾವೆಯನ್ನು
ಎತ್ತಲು ಅದು ನೀರಿನ ಮೇಲೆ ತೇಲತೊಡಗಿತು. 18ನೀರು
ಇನ್ನೂ ಮೇಲೇರತೊಡಗಿದ್ದರಿಂದ ನಾವೆಯೂ ಭೂಮಿ
ಯಿಂದ ಬಹು ಮೇಲೆ ಚಲಿಸತೊಡಗಿತು. 19ನೀರು ಬಹಳ
ವಾಗಿ ಹೆಚ್ಚಿದ್ದರಿಂದ, ಎತ್ತರವಾದ ಬೆಟ್ಟಗಳು ಸಹ ನೀರಿ
ನಿಂದ ಮುಚ್ಚಿಕೊಂಡವು.

20ಬೆಟ್ಟಗಳ ಮೇಲೂ ನೀರು ಹೆಚ್ಚತೊಡಗಿತು. ಅತೀ
ಎತ್ತರವಾದ ಬೆಟ್ಟಕ್ಕಿಂತಲೂ ಇಪ್ಪತ್ತು ಅಡಿ ಹೆಚ್ಚಾಗಿ ನೀರು
ಆವರಿಸಿಕೊಂಡಿತು.

21-22ಭೂಮಿಯ ಮೇಲಿದ್ದ ಪ್ರತಿಯೊಂದು ಜೀವಿಯು
ಸತ್ತುಹೋಯಿತು. ಎಲ್ಲಾ ಪುರುಷರು ಮತ್ತು ಸ್ತ್ರೀಯರು
ಸತ್ತುಹೋದರು. ಎಲ್ಲಾ ಪಕ್ಷಿಗಳು, ಪಶುಗಳು,
ಪ್ರಾಣಿಗಳು ಮತ್ತು ಪ್ರತಿಯೊಂದು ಬಗೆಯ ಕ್ರಿಮಿಗಳು
ಸತ್ತುಹೋದವು.

23ಹೀಗೆ ದೇವರು ಭೂಮಿಯ ಮೇಲಿದ್ದ ಪ್ರತಿ
ಯೊಂದು ಜೀವಿಯನ್ನು ನಾಶಗೊಳಿಸಿದನು. ಪ್ರತಿಯೊಬ್ಬ
ಮನುಷ್ಯನು ನಾಶವಾದನು; ಪ್ರತಿಯೊಂದು ಪ್ರಾಣಿಯು,
ಹರಿದಾಡುವ ಪ್ರತಿಯೊಂದು ಕ್ರಿಮಿಯು ಮತ್ತು ಪ್ರತಿ
ಯೊಂದು ಪಕ್ಷಿಯು ನಾಶವಾದವು. ಉಳಿದುಕೊಂಡವ
ರೆಂದರೆ, ನೋಹ ಮತ್ತು ಅವನ ಕುಟುಂಬದವರು
ಹಾಗೂ ಅವನೊಡನೆ ನಾವೆಯೊಳಗಿದ್ದ ಜೀವಿಗಳು.
24ನೂರೈವತ್ತು ದಿನಗಳವರೆಗೆ ನೀರು ಭೂಮಿಯನ್ನು
ಆವರಿಸಿಕೊಂಡಿತ್ತು.

---

**ಶುದ್ಧ ಪ್ರಾಣಿಗಳು** ಯಜ್ಞಕ್ಕೆ ಯೋಗ್ಯವಾದದ್ದೆಂದು ದೇವರಿಂದ ಪರಿಗಣಿಸಲ್ಪಟ್ಟ ಪಕ್ಷಿಗಳು ಮತ್ತು ಪಶುಗಳು.

### ಜಲಪ್ರಳಯದ ಮುಕ್ತಾಯ

8 ಆದರೆ ದೇವರು ನೋಹನನ್ನು ಮರೆಯಲಿಲ್ಲ. ದೇವರು ನೋಹನನ್ನು ಮತ್ತು ನಾವೆಯಲ್ಲಿದ್ದ ಎಲ್ಲಾ ಪ್ರಾಣಿಗಳನ್ನು ನೆನಪು ಮಾಡಿಕೊಂಡನು. ದೇವರು ಭೂಮಿಯ ಮೇಲೆ ಗಾಳಿಯನ್ನು ಬರಮಾಡಿದನು. ನೀರು ಕಡಿಮೆಯಾಗಲು ಪ್ರಾರಂಭಿಸಿತು.

2 ಆಕಾಶದಿಂದ ಸುರಿಯುತ್ತಿದ್ದ ಮಳೆ ನಿಂತು ಹೋಯಿತು. ಭೂಸೆಲೆಗಳಿಂದ ಉಕ್ಕುತ್ತಿದ್ದ ನೀರು ಸಹ ನಿಂತುಹೋಯಿತು. 3-4 ಭೂಮಿಯನ್ನು ಆವರಿಸಿಕೊಂಡಿದ್ದ ನೀರು ನೂರೈವತ್ತು ದಿನಗಳಾದ ಮೇಲೆ ಕ್ರಮೇಣವಾಗಿ ಕಡಿಮೆಯಾಗುತ್ತಾ ಬಂತು. ಏಳನೆಯ ತಿಂಗಳ ಹದಿನೇಳನೆಯ ದಿನದಲ್ಲಿ ನಾವೆಯು ಅರಾರಾಟ್ ನಾಡಿನಲ್ಲಿದ್ದ ಒಂದು ಬೆಟ್ಟದ ಮೇಲೆ ನಿಂತುಕೊಂಡಿತು. 5 ನೀರು ಕಡಿಮೆಯಾಗತೊಡಗಿದ್ದರಿಂದ ಹತ್ತನೆಯ ತಿಂಗಳ ಮೊದಲನೆಯ ದಿನದಲ್ಲಿ ಬೆಟ್ಟದ ತುದಿಗಳು ಕಾಣತೊಡಗಿದವು. 6 ನಲವತ್ತು ದಿನಗಳಾದ ಮೇಲೆ, ನೋಹನು ತಾನು ಮಾಡಿದ್ದ ನಾವೆಯ ಕಿಟಕಿಯನ್ನು ತೆರೆದು ನೋಡಿದನು. 7 ನೋಹನು ಒಂದು ಕಾಗೆಯನ್ನು ಹೊರಕ್ಕೆ ಬಿಟ್ಟನು. ಭೂಮಿಯ ಮೇಲಿನ ನೀರು ಒಣಗುವವರೆಗೆ ಆ ಕಾಗೆಯು ಸ್ಥಳದಿಂದ ಸ್ಥಳಕ್ಕೆ ಹಾರಾಡುತ್ತಿತ್ತು. 8 ನೆಲ ಒಣಗಿದೆಯೇ, ತೇವವಾಗಿದೆಯೇ ಎಂದು ತಿಳಿದು ಕೊಳ್ಳುವುದಕ್ಕಾಗಿ ನೋಹನು ಒಂದು ಪಾರಿವಾಳವನ್ನು ಸಹ ಹೊರಕ್ಕೆ ಬಿಟ್ಟನು. 9 ನೀರು ಇನ್ನೂ ಇದ್ದಕಾರಣ, ಆ ಪಾರಿವಾಳ ಹಿಂತಿರುಗಿ ಬಂತು. ನೋಹನು ಕೈಚಾಚಿ ಅದನ್ನು ಹಿಡಿದುಕೊಂಡು ನಾವೆಯೊಳಗೆ ಸೇರಿಸಿಕೊಂಡನು.

10 ಏಳುದಿನಗಳವರೆಗೆ ನೋಹನು ಕಾದುಕೊಂಡಿದ್ದು ಮತ್ತೆ ಪಾರಿವಾಳವನ್ನು ಹೊರಕ್ಕೆ ಬಿಟ್ಟನು. 11 ಆ ಸಾಯಂಕಾಲವೂ ಪಾರಿವಾಳ ನೋಹನ ಬಳಿಗೆ ಹಿಂತಿರುಗಿ ಬಂತು. ಅದರ ಕೊಕ್ಕಿನಲ್ಲಿ ಆಲೀವ್ ಮರದ ಎಲೆಯಿತ್ತು. ಇದರಿಂದ, ಭೂಮಿಯಲ್ಲಿ ಒಣನೆಲವಿದೆಯೆಂದು ನೋಹನು ತಿಳಿದುಕೊಂಡನು. 12 ಏಳು ದಿನಗಳ ನಂತರ ನೋಹನು ಮತ್ತೆ ಪಾರಿವಾಳವನ್ನು ಹೊರಕ್ಕೆ ಬಿಟ್ಟನು. ಆದರೆ ಅದು ಈ ಸಲ ಹಿಂತಿರುಗಿ ಬರಲಿಲ್ಲ.

13 ಆದ್ದರಿಂದ ನೋಹನು ನಾವೆಯ ಬಾಗಿಲನ್ನು ತೆರೆದನು. ನೋಹನು ಸುತ್ತಲೂ ನೋಡಿದನು, ನೆಲವೆಲ್ಲಾ ಒಣಗಿತ್ತು. ಅಂದು ಮೊದಲನೆಯ ವರ್ಷದ ಮೊದಲನೆಯ ತಿಂಗಳ ಮೊದಲನೆಯ ದಿನವಾಗಿತ್ತು. ಆಗ ನೋಹನಿಗೆ ಆರುನೂರ ಒಂದು ವರ್ಷವಾಗಿತ್ತು. 14 ಎರಡನೆಯ ತಿಂಗಳ ಇಪ್ಪತ್ತೇಳನೆಯ ದಿನದೊಳಗೆ ನೆಲವೆಲ್ಲಾ ಸಂಪೂರ್ಣವಾಗಿ ಒಣಗಿಹೋಯಿತು.

15-16 ಆಮೇಲೆ ದೇವರು ನೋಹನಿಗೆ, ‘‘ನೀನು, ನಿನ್ನ ಹೆಂಡತಿ, ನಿನ್ನ ಗಂಡು ಮಕ್ಕಳು, ಮತ್ತು ನಿನ್ನ ಸೊಸೆಯರೊಂದಿಗೆ ನಾವೆಯಿಂದ ಹೊರಗೆ ಬನ್ನಿ. 17 ನಿಮ್ಮೊಡನೆ ನಾವೆಯೊಳಗಿದ್ದ ಎಲ್ಲಾ ಜೀವಿಗಳು ಅಂದರೆ ಎಲ್ಲಾ ಪಕ್ಷಿಗಳು ಪ್ರಾಣಿಗಳು ಮತ್ತು ಭೂಮಿಯ ಮೇಲೆ ಹರಿದಾಡುವ ಪ್ರತಿಯೊಂದೂ ಹೊರಗೆ ಬರಲಿ. ಅವುಗಳ ಸಂತಾನವು ಹೆಚ್ಚೆಚ್ಚಾಗಲಿ; ಭೂಮಿಯ ಮೇಲೆಲ್ಲಾ ಅವು ತುಂಬಿಕೊಳ್ಳಲಿ’’ ಅಂದನು.

18 ಆದ್ದರಿಂದ ನೋಹನು ತನ್ನ ಹೆಂಡತಿ, ಗಂಡುಮಕ್ಕಳು ಮತ್ತು ಸೊಸೆಯರೊಂದಿಗೆ ನಾವೆಯಿಂದ ಹೊರಗೆ ಬಂದನು. 19 ಎಲ್ಲಾ ಪ್ರಾಣಿಗಳು, ಪಕ್ಷಿಗಳು, ಹರಿದಾಡುವ ಜೀವಿಗಳು ನಾವೆಯಿಂದ ಹೊರಬಂದವು.

20 ಆಮೇಲೆ ನೋಹನು ಯೆಹೋವನಿಗಾಗಿ ಒಂದು ಯಜ್ಞವೇದಿಕೆಯನ್ನು ಕಟ್ಟಿ ಶುದ್ಧವಾದ ಕೆಲವು ಪಶುಪಕ್ಷಿಗಳನ್ನು ತೆಗೆದುಕೊಂಡು ಅವುಗಳನ್ನು ದೇವರಿಗೆ ಯಜ್ಞವೇದಿಕೆಯ ಮೇಲೆ ಹೋಮಮಾಡಿದನು.

21 ಈ ಯಜ್ಞಗಳ ಸುವಾಸನೆಯು ಯೆಹೋವನಿಗೆ ಮೆಚ್ಚಿಕೆಯಾಯಿತು. ಆಗ ಯೆಹೋವನು ತನ್ನೊಳಗೆ, ‘‘ಜನರನ್ನು ದಂಡಿಸುವುದಕ್ಕಾಗಿ ನಾನು ಇನ್ನೆಂದೂ ಭೂಮಿಯನ್ನು ಶಪಿಸುವುದಿಲ್ಲ. ಜನರು ಚಿಕ್ಕಂದಿನಿಂದಲೇ ಕೆಟ್ಟವರು. ಆದ್ದರಿಂದ ನಾನು ಇನ್ನೆಂದೂ ಭೂಮಿಯ ಮೇಲಿರುವ ಪ್ರತಿಯೊಂದೂ ಜೀವಿಯನ್ನು ನಾಶಮಾಡುವುದಿಲ್ಲ; ಮತ್ತೆಂದೂ ನಾನು ಹೀಗೆ ಮಾಡುವುದಿಲ್ಲ. 22 ಭೂಮಿ ಇರುವವರೆಗೆ ಬಿತ್ತನೆಕಾಲ, ಸುಗ್ಗಿಕಾಲ ಯಾವಾಗಲೂ ಇರುತ್ತವೆ. ಹಿಮಕಾಲ, ಬೇಸಿಗೆಕಾಲ, ಚಳಿಗಾಲ, ಹಗಲು ಮತ್ತು ರಾತ್ರಿ ಯಾವಾಗಲೂ ಇದ್ದೇ ಇರುತ್ತವೆ’’ ಎಂದು ಅಂದುಕೊಂಡನು.

### ಹೊಸ ಪ್ರಾರಂಭ

9 ದೇವರು ನೋಹನನ್ನೂ ಅವನ ಮಕ್ಕಳನ್ನೂ ಆಶೀರ್ವದಿಸಿ ಅವರಿಗೆ, ‘‘ಅನೇಕ ಮಕ್ಕಳನ್ನು ಪಡೆದು ಭೂಮಿಯಲ್ಲೆಲ್ಲಾ ತುಂಬಿಕೊಳ್ಳಿರಿ. 2 ಭೂಮಿಯ ಮೇಲಿರುವ ಪ್ರತಿಯೊಂದು ಪ್ರಾಣಿಯೂ ನಿಮಗೆ ಹೆದರಿ ಭಯಪಡುವುದು; ಆಕಾಶದಲ್ಲಿ ಹಾರಾಡುವ ಪ್ರತಿಯೊಂದು ಪಕ್ಷಿಯೂ ನಿಮಗೆ ಹೆದರಿ ಭಯಪಡುವುದು; ನೆಲದ ಮೇಲೆ ಹರಿದಾಡುವ ಪ್ರತಿಯೊಂದು ಕ್ರಿಮಿಯೂ ಮತ್ತು ಸಮುದ್ರದಲ್ಲಿರುವ ಪ್ರತಿಯೊಂದು ಮೀನು ನಿಮಗೆ ಹೆದರಿ ಭಯಪಡುವುದು. ನೀವು ಅವುಗಳಿಗೆಲ್ಲಾ ಒಡೆಯರಾಗಿರುತ್ತೀರಿ. 3 ಮೊದಲು, ನಿಮ್ಮ ಆಹಾರಕ್ಕಾಗಿ ಸಸ್ಯಗಳನ್ನು ಕೊಟ್ಟೆನು. ಈಗ ನಿಮ್ಮ ಆಹಾರಕ್ಕಾಗಿ ಪ್ರತಿಯೊಂದು ಪ್ರಾಣಿಯನ್ನೂ ಕೊಟ್ಟಿದ್ದೇನೆ. ಭೂಮಿಯ ಮೇಲಿರುವ ಎಲ್ಲವನ್ನೂ ನಾನು ನಿಮಗೋಸ್ಕರ ಕೊಟ್ಟಿದ್ದೇನೆ. 4 ಆದರೆ ನಾನು ನಿಮಗೆ ಆಜ್ಞಾಪಿಸುವುದೇನೆಂದರೆ ಜೀವದಿಂದ (ರಕ್ತದಿಂದ) ಕೂಡಿರುವ ಮಾಂಸವನ್ನು

ನೀವು ತಿನ್ನಕೂಡದು. 5 ಯಾವನಾದರೂ ನಿಮ್ಮ ಜೀವಹತ್ಯೆ
ಮಾಡಿದರೆ, ನಾನು ಅವನ ಜೀವವನ್ನು ತೆಗೆಯುವೆನು.
ಯಾವ ಪ್ರಾಣಿಯಾದರೂ ಮನುಷ್ಯನನ್ನು ಕೊಂದರೆ,
ನಾನು ಆ ಪಾಣಿಯ ಪ್ರಾಣವನ್ನು ತೆಗೆಯುತ್ತೇನೆ.

6 ‘‘ದೇವರು ಮನುಷ್ಯನನ್ನು ತನ್ನ ಹೋಲಿಕೆಗನು
ಸಾರವಾಗಿ ನಿರ್ಮಿಸಿದನು. ಆದ್ದರಿಂದ ಯಾವನು
ಮನುಷ್ಯನ ರಕ್ತವನ್ನು ಸುರಿಸುವನೋ ಅವನ
ರಕ್ತವನ್ನು ಮನುಷ್ಯನೇ ಸುರಿಸುವನು.’’

7 ‘‘ನೋಹನೇ, ನಿನಗೂ ನಿನ್ನ ಮಕ್ಕಳಿಗೂ ಅನೇಕ
ಮಕ್ಕಳು ಹುಟ್ಟಲಿ. ನೀವು ಅಭಿವೃದ್ಧಿಗೊಂಡು ಭೂಮಿ
ಯಲ್ಲಿ ತುಂಬಿಕೊಳ್ಳಿರಿ’’ ಎಂದು ಹೇಳಿದನು.

8-9 ಆಮೇಲೆ ದೇವರು ನೋಹನಿಗೂ ಅವನ ಮಕ್ಕ
ಳಿಗೂ, ‘‘ನಾನು ನಿಮಗೆ ಮತ್ತು ಮುಂದೆ ಜೀವಿಸುವ ನಿಮ್ಮ
ಜನರಿಗೆ ವಾಗ್ದಾನ ಮಾಡುತ್ತೇನೆ. 10 ನಾವೆಯೊಳಗಿಂದ
ಬಂದ ಎಲ್ಲ ಪಕ್ಷಿಗಳಿಗೆ, ಎಲ್ಲಾ ಪಶುಗಳಿಗೆ ಮತ್ತು ಪ್ರಾಣಿ
ಗಳಿಗೆ ನಾನು ವಾಗ್ದಾನ ಮಾಡುತ್ತೇನೆ. ಭೂಮಿಯ ಮೇಲಿ
ರುವ ಪ್ರತಿಯೊಂದು ಜೀವಿಗೆ ವಾಗ್ದಾನ ಮಾಡುತ್ತೇನೆ.
11 ನಾನು ನಿಮಗೆ ಮಾಡುವ ವಾಗ್ದಾನವೇನಂದರೆ:
ಭೂಮಿಯ ಮೇಲಿದ್ದ ಎಲ್ಲಾ ಜೀವಿಗಳು ಜಲಪ್ರಳಯ
ದಿಂದ ನಾಶವಾದವು. ಆದರೆ ಮತ್ತೆಂದಿಗೂ ಈ ರೀತಿ
ಆಗುವುದಿಲ್ಲ. ಜಲಪ್ರಳಯವು ಭೂಮಿಯ ಮೇಲಿರುವ
ಎಲ್ಲಾ ಜೀವಿಗಳನ್ನು ಇನ್ನೆಂದಿಗೂ ನಾಶಗೊಳಿಸುವುದಿಲ್ಲ’’
ಎಂದು ಹೇಳಿದನು.

12 ಇದಲ್ಲದೆ ದೇವರು, ‘‘ನನ್ನ ವಾಗ್ದಾನಕ್ಕೆ ಸಾಕ್ಷಿಯಾಗಿ
ನಾನು ನಿಮಗೊಂದು ಗುರುತನ್ನು ಕೊಡುವೆನು. ನಾನು
ನಿಮ್ಮೊಡನೆ ಮತ್ತು ಭೂಮಿಯ ಮೇಲಿರುವ ಪ್ರತಿ
ಯೊಂದು ಜೀವಿಯೊಡನೆ ಒಡಂಬಡಿಕೆ ಮಾಡಿಕೊಂಡಿ
ರುವುದನ್ನು ಈ ಗುರುತು ತೋರಿಸುತ್ತದೆ. ಈ ಗುರುತು
ಯಾವಾಗಲೂ ಇರುವುದು. 13 ನಾನು ಮೋಡಗಳಲ್ಲಿ
ಇಟ್ಟಿರುವ ಮುಗಿಲುಬಿಲ್ಲು ನನಗೂ ಭೂಮಿಗೂ ಆಗಿ
ರುವ ಒಡಂಬಡಿಕೆಗೆ ಗುರುತಾಗಿರುವುದು. 14 ನಾನು
ಮೋಡಗಳನ್ನು ಭೂಮಿಯ ಮೇಲೆ ಕವಿಸುವಾಗ, ಮೋಡ
ದಲ್ಲಿ ಮುಗಿಲುಬಿಲ್ಲನ್ನು ಕಾಣುವಿರಿ. 15 ನಾನು ಈ
ಮುಗಿಲುಬಿಲ್ಲನ್ನು ಕಾಣುವಾಗ, ನನಗೂ ನಿಮಗೂ
ಮತ್ತು ಭೂಮಿಯ ಮೇಲಿರುವ ಎಲ್ಲ ಜೀವಿಗಳಿಗೂ
ಆಗಿರುವ ಒಡಂಬಡಿಕೆಯನ್ನು ನೆನಪುಮಾಡಿಕೊಳ್ಳುವೆನು.
ಜಲಪ್ರಳಯವು ಇನ್ನೆಂದಿಗೂ ಭೂಮಿಯ ಮೇಲಿರುವ
ಎಲ್ಲಾ ಜೀವಿಗಳನ್ನು ನಾಶಗೊಳಿಸುವುದಿಲ್ಲ ಎಂಬುದೇ ಈ
ಒಡಂಬಡಿಕೆ. 16 ನಾನು ಮೋಡಗಳಲ್ಲಿರುವ ಮುಗಿಲು
ಬಿಲ್ಲನ್ನು ನೋಡುವಾಗ, ಶಾಶ್ವತವಾದ ಈ ಒಡಂಬಡಿಕೆ
ಯನ್ನು ಜ್ಞಾಪಕಮಾಡಿಕೊಳ್ಳುವೆನು. ನನಗೂ ಮತ್ತು
ಭೂಮಿಯ ಮೇಲಿರುವ ಪ್ರತಿಯೊಂದು ಜೀವಿಗಳಿಗೂ
ಆದ ಒಡಂಬಡಿಕೆಯನ್ನು ನೆನಸಿಕೊಳ್ಳುವೆನು’’ ಎಂದು
ಹೇಳಿದನು. 17 ಆದ್ದರಿಂದ ದೇವರು ನೋಹನಿಗೆ,
‘‘ಭೂಮಿಯ ಮೇಲಿರುವ ಎಲ್ಲಾ ಜೀವಿಗಳೊಡನೆ ನಾನು
ಮಾಡಿಕೊಂಡ ಒಡಂಬಡಿಕೆಗೆ ಈ ಮುಗಿಲುಬಿಲ್ಲು
ಗುರುತಾಗಿರುವುದು’’ ಎಂದು ಹೇಳಿದನು.

### ಸಮಸ್ಯೆಗಳ ಪ್ರಾರಂಭ

18 ನೋಹನ ಗಂಡು ಮಕ್ಕಳು ನೋಹನೊಡನೆ ನಾವೆ
ಯೊಳಗಿಂದ ಹೊರಬಂದರು. ಅವರ ಹೆಸರುಗಳು:
ಶೇಮ್, ಹಾಮ್ ಮತ್ತು ಯೆಫೆತ್ (ಹಾಮನು ಕಾನಾನನ
ತಂದೆ.) 19 ಈ ಮೂವರು ನೋಹನ ಗಂಡು ಮಕ್ಕಳು.
ಭೂಮಿಯ ಮೇಲಿರುವ ಜನರೆಲ್ಲರಿಗೂ ಇವರೇ ಮೂಲ
ಪುರುಷರು.

20 ನೋಹನು ರೈತನಾದನು. ಅವನು ಒಂದು ದ್ರಾಕ್ಷಿ
ತೋಟ ಮಾಡಿದನು. 21 ಒಮ್ಮೆ ಅವನು ದ್ರಾಕ್ಷಾರಸ ಕುಡಿ
ದನು. ಅವನಿಗೆ ಮತ್ತೇರಿದ್ದರಿಂದ ತನ್ನ ಡೇರೆಯಲ್ಲಿ ಬೆತ್ತಲೆ
ಯಾಗಿ ಮಲಗಿಕೊಂಡನು. 22 ಕಾನಾನನ ತಂದೆಯಾದ
ಹಾಮನು ತನ್ನ ತಂದೆ ಬೆತ್ತಲೆಯಾಗಿ ಮಲಗಿರುವುದನ್ನು
ಕಂಡು ಈ ವಿಷಯವನ್ನು ಗುಡಾರದ ಹೊರಗಿದ್ದ ತನ್ನ
ಸಹೋದರರಿಗೆ ತಿಳಿಸಿದನು. 23 ಆಗ ಶೇಮನು ಮತ್ತು
ಯೆಫೆತನು ಒಂದು ಕಂಬಳಿಯನ್ನು ತಮ್ಮ ಬೆನ್ನಿನ ಮೇಲೆ
ಹಾಕಿಕೊಂಡು ಹಿಮ್ಮುಖವಾಗಿ ಡೇರೆಯೊಳಗೆ ಬಂದು
ತಮ್ಮ ತಂದೆಗೆ ಹೊದಿಸಿದರು. ಅವರು ಅವನ ಬೆತ್ತಲೆ ದೇಹ
ವನ್ನು ನೋಡಲಿಲ್ಲ.

24 ಆಮೇಲೆ ನೋಹನು ಎಚ್ಚರಗೊಂಡನು. ಕಿರಿಮಗ
ನಾದ ಹಾಮನು ಏನು ಮಾಡಿದನು ಎಂದು ಅವನಿಗೆ ತಿಳಿ
ಯಿತು. 25 ಆದ್ದರಿಂದ ನೋಹನು,

‘‘ಕಾನಾನನು ತನ್ನ ಸಹೋದರರಿಗೆಲ್ಲಾ ಕೀಳಾದ
ಗುಲಾಮನಾಗಿರಲಿ’’ ಎಂದು ಶಪಿಸಿದನು.

26 ಅಲ್ಲದೆ ನೋಹನು,

‘‘ಶೇಮನ ದೇವರಾದ ಯೆಹೋವನಿಗೆ ಸ್ತೋತ್ರ
ವಾಗಲಿ: ಕಾನಾನನು ಶೇಮನಿಗೆ ಗುಲಾಮ
ನಾಗಿರಲಿ.

27 ದೇವರು ಯೆಫೆತನಿಗೆ ಹೆಚ್ಚು ಭೂಮಿಯನ್ನು
ಕೊಡಲಿ. ಶೇಮನ ಗುಡಾರಗಳಲ್ಲಿ ದೇವರು

ವಾಸಿಸಲಿ. ಕಾನಾನನು ಅವರಿಗೆ ಗುಲಾಮ
ನಾಗಿರಲಿ'' ಎಂದು ಹೇಳಿದನು.

28ಜಲಪ್ರಳಯದ ನಂತರ ನೋಹನು ಮುನ್ನೂರೈವತ್ತು
ವರ್ಷ ಬದುಕಿದ್ದನು. 29ನೋಹನು ಒಟ್ಟು ಒಂಬೈನೂರೈ
ವತ್ತು ವರ್ಷ ಜೀವಿಸಿ ಸತ್ತುಹೋದನು.

### ಜನಾಂಗಗಳ ಬೆಳವಣಿಗೆ ಮತ್ತು ವಿಸ್ತರಣೆ

10 ನೋಹನ ಗಂಡುಮಕ್ಕಳು: ಶೇಮ್, ಹಾಮ್
ಮತ್ತು ಯೆಫೆತ್. ಜಲಪ್ರಳಯದ ನಂತರ ಈ
ಮೂವರು ಅನೇಕ ಗಂಡುಮಕ್ಕಳನ್ನು ಪಡೆದರು.
ಶೇಮನಿಗೂ ಹಾಮನಿಗೂ ಯೆಫೆತನಿಗೂ ಹುಟ್ಟಿದ
ಗಂಡುಮಕ್ಕಳು:

### ಯೆಫೆತನ ಸಂತತಿಯವರು

2ಯೆಫೆತನ ಗಂಡುಮಕ್ಕಳು: ಗೋಮೆರ್,
ಮಾಗೋಗ್, ಮಾದಯ್, ಯಾವಾನ್, ತೂಬಲ್,
ಮೆಷೆಕ್ ಮತ್ತು ತೀರಾಸ್.
3ಗೋಮೆರನ ಗಂಡುಮಕ್ಕಳು: ಅಷ್ಕೆನಸ್, ರೀಫತ್,
ಮತ್ತು ತೋಗರ್ಮ.
4ಯಾವಾನನ ಗಂಡುಮಕ್ಕಳು: ಎಲೀಷಾ, ತಾರ್ಷೀಸ್,
ಕಿತ್ತೀಮ್ ಮತ್ತು ದೋದಾನೀಮ್.
5ತೀರ ಪ್ರದೇಶದ* ಜನರೆಲ್ಲರು ಯೆಫೆತನ ಮಕ್ಕಳ
ಸಂತಾನಕ್ಕೆ ಸೇರಿದವರು. ಅವನ ಪ್ರತಿಯೊಬ್ಬ ಮಗನಿಗೂ
ಸ್ವಂತ ಭೂಮಿ ಇತ್ತು. ಅವರೆಲ್ಲರ ಕುಟುಂಬಗಳು ವೃದ್ಧಿ
ಗೊಂಡು ಅನೇಕ ಜನಾಂಗಗಳಾದವು. ಪ್ರತಿಯೊಂದು
ಜನಾಂಗಕ್ಕೂ ಸ್ವಂತ ಭಾಷೆಯಿತ್ತು.

### ಹಾಮನ ಸಂತತಿಯವರು

6ಹಾಮನ ಗಂಡು ಮಕ್ಕಳು: ಕೂಷ್,*
ಮಿಚ್ರಯಿಮ್* ಪೂತ್ ಮತ್ತು ಕಾನಾನ್
7ಕೂಷನ ಗಂಡುಮಕ್ಕಳು: ಸೆಬಾ ಹವೀಲ, ಸಟ್ತಾರಗ್ಮ
ಮತ್ತು ಸಬ್ತಕಾ
ರಗ್ಮನ ಗಂಡುಮಕ್ಕಳು:ಶೆಬಾ ಮತ್ತು ದೆದಾನ್.
8ಕೂಷನಿಗೆ ನಿಮ್ರೋದನೆಂಬ ಗಂಡುಮಗನಿದ್ದನು.
ನಿಮ್ರೋದನು ಭೂಲೋಕದಲ್ಲಿ ಮಹಾಬಲಶಾಲಿಯಾಗಿ
ದ್ದನು. 9ಯೆಹೋವನ ಮುಂದೆ ಅವನು ಚತುರ ಬೇಟೆ
ಗಾರನಾಗಿದ್ದನು. ಆದ್ದರಿಂದ ಜನರು ಬೇರೆಯವರನ್ನು
ಅವನಿಗೆ ಹೋಲಿಸಿ, ''ಅವನು ನಿಮ್ರೋದನಂತೆ,
ಯೆಹೋವನ ಮುಂದೆ ಚತುರ ಬೇಟೆಗಾರ'' ಎಂದು
ಹೇಳುತ್ತಿದ್ದರು.
10ನಿಮ್ರೋದನ ರಾಜ್ಯವು ಶಿನಾರ್ ದೇಶದಲ್ಲಿರುವ
ಬಾಬಿಲೋನಿನಲ್ಲಿ, ಯೆರೆಕ್‌ನಲ್ಲಿ ಮತ್ತು ಅಕ್ಕದ್ ಮತ್ತು
ಕಲ್ನೇ ಎಂಬ ಪಟ್ಟಣಗಳಲ್ಲಿ ಪ್ರಾರಂಭವಾಯಿತು.
11-12ನಿಮ್ರೋದನು ಅಶ್ಶೂರಕ್ಕೂ ಹೋದನು. ಅಶ್ಶೂರ
ದಲ್ಲಿ ನಿನೆವೆ, ರೆಹೋಬೋತೀರ್, ಕೆಲಹ ಮತ್ತು ರೆಸೆನ್
ಎಂಬ ಪಟ್ಟಣಗಳನ್ನು ಕಟ್ಟಿದನು. ರೆಸೆನ್ ಪಟ್ಟಣವು
ನಿನೆವೆಗೂ ದೊಡ್ಡಪಟ್ಟಣವಾದ ಕೆಲಹಕ್ಕೂ ಮಧ್ಯದಲ್ಲಿದೆ.
13-14ಮಿಚ್ರಯಿಮನು ಲೂದ್, ಅನಾಮ್, ಲೆಹಾಬ್,
ನಫ್ತುಹ್, ಪತ್ರುಸ್ ಕಸ್ಲುಹ್ಯ ಮತ್ತು ಕಫ್ತೋರ್ಯ
ಎಂಬವರ ತಂದೆ. (ಕಸ್ಲುಹ್ಯರು ಫಿಲಿಷ್ಟಿಯರ ಪಿತೃಗಳು.)
15ಕಾನಾನನು ಸೀದೋನನ ತಂದೆ. ಕಾನಾನನ ಮೊದಲ
ನೆಯ ಮಗನೇ ಸೀದೋನ್. ಇವನು ಹಿತ್ತಿಯರ ಮೂಲ
ಪಿತೃ. 16-18ಕಾನಾನನು ಯೆಬೂಸಿಯರಿಗೆ, ಅಮೋರಿಯ
ರಿಗೆ, ಗಿರ್ಗಾಷಿಯರಿಗೆ, ಹಿವ್ವಿಯರಿಗೆ, ಅರ್ಕಿಯರಿಗೆ,
ಸೀನಿಯರಿಗೆ, ಅರ್ವಾದಿಯರಿಗೆ, ಚೆಮಾರಿಯರಿಗೆ ಮತ್ತು
ಹಮಾತಿಯರಿಗೆ ಮೂಲಪುರುಷನು. ಕಾನಾನನ
ಕುಟುಂಬಗಳು ಪ್ರಪಂಚದ ನಾನಾ ಭಾಗಗಳಲ್ಲಿ ಹರಡಿ
ಕೊಂಡಿದ್ದವು.
19ಕಾನಾನ್ಯರ ಸೀಮೆಯು ಸೀದೋನಿನ ಉತ್ತರ
ದಿಂದಿಡಿದು ಗೆರಾರಿನ ದಕ್ಷಿಣದವರೆಗೂ, ಗಾಜಾದಿಂದ
ಪೂರ್ವದ ಸೋದೋಮ್ ಗೋಮೋರ ಪಟ್ಟಣಗಳ
ವರೆಗೂ, ಆದ್ಮಾ ಮತ್ತು ಚೆಬೋಯಿಮ್‌ಗಳಿಂದ ಲೆಷಾದ
ವರೆಗೆ ವಿಸ್ತರಿಸಿತ್ತು.
20ಅವರೆಲ್ಲರೂ ಹಾಮನ ಸಂತತಿಯವರು. ಆ
ಕುಟುಂಬಗಳವರೆಲ್ಲರು ತಮ್ಮ ಸ್ವಂತ ಭಾಷೆಗಳನ್ನು ಮತ್ತು
ತಮ್ಮ ಸ್ವಂತ ನಾಡುಗಳನ್ನು ಹೊಂದಿದ್ದರು. ಅವುಗಳೆಲ್ಲ
ಪ್ರತ್ಯೇಕ ಜನಾಂಗಗಳಾದರು.

### ಶೇಮನ ಸಂತತಿಯವರು

21ಶೇಮನು ಯೆಫೆತನ ಅಣ್ಣ. ಶೇಮನ ಸಂತತಿಯವ
ರಲ್ಲಿ ಎಬರನೂ* ಒಬ್ಬನು. ಎಬರನು ಹೀಬ್ರೂ ಜನರ
ಮೂಲ ಪಿತೃ.
22ಶೇಮನ ಗಂಡುಮಕ್ಕಳು: ಏಲಾಮ್, ಅಶ್ಶೂರ್,
ಅರ್ಪಕ್ಷದ್, ಲೂದ್ ಮತ್ತು ಅರಾಮ್.
23ಅರಾಮನ ಗಂಡುಮಕ್ಕಳು: ಊಜ್ ಹೂಲ್,
ಗೆತೆರ್ ಮತ್ತು ಮಷ್.

---

**ತೀರ ಪ್ರದೇಶ** ಮೆಡಿಟೇರಿಯನ್ ಸಮುದ್ರದ ಸುತ್ತಮುತ್ತಲಿನ ಪ್ರದೇಶಗಳು.

**ಕೂಷ್** ಇಥಿಯೋಪಿಯಾದ ಮತ್ತೊಂದು ಹೆಸರು.

**ಮಿಚ್ರಯಿಮ್** ಈಜಿಪ್ಟಿನ ಮತ್ತೊಂದು ಹೆಸರು.

**ಎಬರನು** ಹೀಬ್ರೂ ಜನರ ಮೂಲ ಪಿತೃ. ಅಕ್ಷರಶಃ, ''ಎಬರನ ಗಂಡುಮಕ್ಕಳ ತಂದೆ ಶೇಮನಿಗೆ ಹುಟ್ಟಿದವನು.''

24ಅರ್ಪಕ್ಷದನು ಶೆಲಹನ ತಂದೆ, ಶೆಲಹನು ಎಬರನ ತಂದೆ. 25ಎಬರನಿಗೆ ಇಬ್ಬರು ಗಂಡುಮಕ್ಕಳಿದ್ದರು. ಮೊದಲನೆಯ ಮಗನು ಹುಟ್ಟಿದ ಕಾಲದಲ್ಲಿ ಭೂಮಿಯ ಜನಾಂಗಗಳು ವಿಂಗಡವಾದದ್ದರಿಂದ ಅವನಿಗೆ ಪೆಲೆಗ್* ಎಂದು ಹೆಸರಿಟ್ಟನು; ಎರಡನೆಯ ಮಗನ ಹೆಸರು ಯೊಕ್ತಾನ್.

26ಯೊಕ್ತಾನನು ಅಲ್ಮೋದಾದ್, ಶೆಲೆಪ್, ಹಚರ್ಮಾವೆತ್ ಮತ್ತು ಯೆರಹ ಎಂಬುವರ ತಂದೆ. 27ಯೊಕ್ತಾನನ ಗಂಡುಮಕ್ಕಳು: ಹದೋರಾಮ್, ಊಜಾಲ್, ದಿಕ್ಲಾ. 28ಓಬಾಲ್, ಅಬೀಮಯೇಲ್, ಶೆಬಾ. 29ಓಫೀರ್, ಹವೀಲ ಮತ್ತು ಯೋಬಾಬ್. 30ಇವರೆಲ್ಲರೂ ಮೇಶಾ ಸೀಮೆಯನ್ನು ಮೊದಲುಗೊಂಡು ಪೂರ್ವದ ಬೆಟ್ಟಗುಡ್ಡದ ಪ್ರದೇಶದಲ್ಲಿ ವಾಸಿಸಿದರು. ಸೆಫಾರಿಗೆ ಹೋಗುವ ದಿಕ್ಕಿನಲ್ಲಿ ಮೇಶಾ ಸೀಮೆಯಿತ್ತು.

31ಇವರೆಲ್ಲರೂ ಶೇಮನ ಕುಟುಂಬಕ್ಕೆ ಸೇರಿದವರು. ಇವರೆಲ್ಲರು ಕುಟುಂಬಾನುಸಾರವಾಗಿಯೂ ಭಾಷಾನುಸಾರವಾಗಿಯೂ ದೇಶಾನುಸಾರವಾಗಿಯೂ ಜನಾಂಗಗಳಿಗನುಸಾರವಾಗಿಯೂ ಹರಡಿಕೊಂಡಿದ್ದರು.

32ನೋಹನ ಗಂಡುಮಕ್ಕಳಿಂದ ಉಂಟಾದ ವಂಶಗಳವರ ಪಟ್ಟಿಯಿದು. ಅವರು ತಮ್ಮ ಜನಾಂಗಗಳಿಗನುಸಾರವಾಗಿ ಹರಡಿಕೊಂಡಿದ್ದರು. ಜಲಪ್ರಳಯದ ನಂತರ ಭೂಮಿಯಲ್ಲೆಲ್ಲಾ ಹರಡಿಕೊಂಡವರು ಈ ವಂಶಗಳವರೇ.

## ಪ್ರಪಂಚದ ವಿಭಜನೆ

11 (ಜಲಪ್ರಳಯದ ನಂತರ) ಇಡೀ ಪ್ರಪಂಚದ ಜನರು ಒಂದೇ ಭಾಷೆಯನ್ನು ಮಾತಾಡುತ್ತಿದ್ದರು. ಎಲ್ಲಾ ಜನರು ಒಂದೇ ಭಾಷೆಯ ಪದಗಳನ್ನು ಬಳಸುತ್ತಿದ್ದರು. 2ಜನರು ಪೂರ್ವದಿಕ್ಕಿನಿಂದ ಪ್ರಯಾಣ ಮಾಡಿ ಶಿನಾರ್ ಪ್ರದೇಶದಲ್ಲಿ ಬಯಲು ಸೀಮೆಯನ್ನು ಕಂಡು ಅಲ್ಲೇ ಉಳಿದುಕೊಂಡರು.

3ಅವರು ಒಬ್ಬರಿಗೊಬ್ಬರು ಮಾತಾಡುತ್ತಾ, ''ಒಳ್ಳೆಯ ಸುಟ್ಟ ಇಟ್ಟಿಗೆಗಳನ್ನು ಮಾಡೋಣ'' ಎಂದು ನಿರ್ಧರಿಸಿದರು. ಅವರು ತಮ್ಮ ಮನೆಗಳನ್ನು ಕಟ್ಟಲು ಕಲ್ಲುಗಳ ಬದಲಾಗಿ ಇಟ್ಟಿಗೆಗಳನ್ನೂ ಗಾರೆಗೆ ಬದಲಾಗಿ ಕಲ್ಲರಗನ್ನೂ ಉಪಯೋಗಿಸಿದರು. 4ಬಳಿಕ ಅವರು,''ನಾವು ನಮಗಾಗಿ ಒಂದು ಪಟ್ಟಣವನ್ನೂ ಆಕಾಶವನ್ನು ಮುಟ್ಟುವಂಥ ಗೋಪುರವನ್ನೂ ಕಟ್ಟಿದರೆ ನಾವು ಪ್ರಸಿದ್ಧರಾಗುತ್ತೇವೆ. ಆಗ ನಾವು ಭೂಮಿಯಲ್ಲೆಲ್ಲಾ ಚದರಿಹೋಗದೆ ಒಂದೇ ಸ್ಥಳದಲ್ಲಿ ವಾಸಿಸಲು ಸಾಧ್ಯವಾಗುತ್ತದೆ.'' ಎಂದು ಮಾತಾಡಿಕೊಂಡರು.

5ಯೆಹೋವನು ಪಟ್ಟಣವನ್ನೂ ಗೋಪುರವನ್ನೂ ನೋಡಲು ಇಳಿದುಬಂದನು. ಜನರು ಅವುಗಳನ್ನು ಕಟ್ಟುತ್ತಿರುವುದನ್ನು ಕಂಡು 6ಯೆಹೋವನು, ''ಈ ಜನರೆಲ್ಲರು ಒಂದೇ ಭಾಷೆಯನ್ನು ಮಾತಾಡುವುದರಿಂದ ಒಟ್ಟಾಗಿ ಸೇರಿಕೊಂಡಿದ್ದಾರೆ. ಪ್ರಾರಂಭದಲ್ಲೇ ಇಂಥ ಕಾರ್ಯವನ್ನು ಮಾಡುತ್ತಿರುವ ಇವರು ಮುಂದೆ ಏನು ಬೇಕಾದರೂ ಮಾಡಲು ಶಕ್ತರಾಗುವರು. 7ಆದ್ದರಿಂದ ನಾವು ಕೆಳಗೆ ಹೋಗಿ ಅವರ ಭಾಷೆಯನ್ನು ತಾರುಮಾರು ಮಾಡೋಣ; ಆಗ ಅವರು ಒಬ್ಬರನ್ನೊಬ್ಬರು ಅರ್ಥಮಾಡಿಕೊಳ್ಳುವುದಿಲ್ಲ'' ಎಂದು ಹೇಳಿದನು.

8ಅಂತೆಯೇ ಯೆಹೋವನು ಜನರನ್ನು ಭೂಮಿಯ ಮೇಲೆಲ್ಲಾ ಚದರಿಸಿಬಿಟ್ಟನು. ಆದ್ದರಿಂದ ಆ ಪಟ್ಟಣವನ್ನು ಕಟ್ಟಿ ಪೂರೈಸಲು ಅವರಿಗೆ ಸಾಧ್ಯವಾಗಲಿಲ್ಲ. 9ಯೆಹೋವನು ಇಡೀ ಲೋಕದ ಭಾಷೆಯನ್ನು ತಾರುಮಾರು ಮಾಡಿದ್ದು ಆ ಸ್ಥಳದಲ್ಲೇ. ಆದ್ದರಿಂದ ಆ ಸ್ಥಳಕ್ಕೆ ಬಾಬಿಲೋನ್* ಎಂದು ಹೆಸರಾಯಿತು. ಹೀಗೆ ಯೆಹೋವನು ಜನರನ್ನು ಆ ಸ್ಥಳದಿಂದ ಭೂಮಿಯಲ್ಲೆಲ್ಲಾ ಚದರಿಸಿಬಿಟ್ಟನು.

## ಶೇಮನ ಕುಟುಂಬ ಚರಿತ್ರೆ

10ಇದು ಶೇಮನ ಕುಟುಂಬ ಚರಿತ್ರೆ. ಜಲಪ್ರಳಯದ ಎರಡು ವರ್ಷಗಳ ನಂತರ ಶೇಮನು ನೂರುವರ್ಷದವನಾಗಿದ್ದಾಗ ಅರ್ಪಕ್ಷದ್ ಎಂಬ ಮಗನನ್ನು ಪಡೆದನು. 11ಆ ಬಳಿಕ ಶೇಮನು ಐನೂರು ವರ್ಷ ಬದುಕಿದ್ದನು. ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.

12ಅರ್ಪಕ್ಷದನು ಮೂವತ್ತೈದು ವರ್ಷದವನಾಗಿದ್ದಾಗ ಶೆಲಹ ಎಂಬ ಮಗನನ್ನು ಪಡೆದನು. 13ಶೆಲಹನು ಜನಿಸಿದ ಮೇಲೆ ಅರ್ಪಕ್ಷದನು ನಾನೂರ ಮೂರು ವರ್ಷ ಬದುಕಿದ್ದನು. ಆ ಅವಧಿಯಲ್ಲಿ ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.

14ಶೆಲಹನು ಮೂವತ್ತು ವರ್ಷದವನಾಗಿದ್ದಾಗ ಎಬರ ಎಂಬ ಮಗನನ್ನು ಪಡೆದನು. 15ಎಬರನು ಹುಟ್ಟಿದ ಮೇಲೆ ಶೆಲಹನು ನಾನೂರ ಮೂರು ವರ್ಷ ಬದುಕಿದ್ದನು. ಆ ಕಾಲದಲ್ಲಿ ಅವನು ಇತರ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.

16ಎಬರನು ಮೂವತ್ನಾಲ್ಕು ವರ್ಷದವನಾಗಿದ್ದಾಗ ಪೆಲೆಗ ಎಂಬ ಮಗನನ್ನು ಪಡೆದನು. 17ಪೆಲೆಗನು ಹುಟ್ಟಿದ ಮೇಲೆ ಎಬರನು ನಾನೂರ ಮೂವತ್ತು ವರ್ಷಕ್ಕಿಂತಲೂ ಹೆಚ್ಚು ವರ್ಷ ಬದುಕಿದ್ದನು. ಆ ಕಾಲದಲ್ಲಿ ಅವನು ಬೇರೆ ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.

---

**ಪೆಲೆಗ್** ಈ ಹೆಸರಿನ ಅರ್ಥ ''ವಿಂಗಡಣೆ.''

**ಬಾಬಿಲೋನ್** ಇದರರ್ಥ ''ತಾರುಮಾರು.''

18ಪೆಲೆಗನು ಮೂವತ್ತು ವರ್ಷದವನಾಗಿದ್ದಾಗ ರೆಗೂವ
ಎಂಬ ಮಗನನ್ನು ಪಡೆದನು. 19ರೆಗೂವನು ಹುಟ್ಟಿದ
ಮೇಲೆ ಪೆಲೆಗನು ಇನ್ನೂರ ಒಂಭತ್ತು ವರ್ಷ ಬದುಕಿದ್ದನು.
ಆ ಕಾಲದಲ್ಲಿ ಅವನು ಬೇರೆ ಗಂಡು ಮತ್ತು ಹೆಣ್ಣು
ಮಕ್ಕಳನ್ನು ಪಡೆದನು.
20ರೆಗೂವನು ಮೂವತ್ತೆರಡು ವರ್ಷದವನಾಗಿದ್ದಾಗ
ಸೆರೂಗ ಎಂಬ ಮಗನನ್ನು ಪಡೆದನು. 21ಸೆರೂಗನು
ಹುಟ್ಟಿದ ಮೇಲೆ ರೆಗೂವನು ಇನ್ನೂರ ಏಳು ವರ್ಷ ಬದುಕಿ
ದ್ದನು. ಆ ಕಾಲದಲ್ಲಿ ಅವನು ಬೇರೆ ಗಂಡು ಮತ್ತು ಹೆಣ್ಣು
ಮಕ್ಕಳನ್ನು ಪಡೆದನು.
22ಸೆರೂಗನು ಮೂವತ್ತು ವರ್ಷದವನಾಗಿದ್ದಾಗ
ನಾಹೋರ ಎಂಬ ಮಗನನ್ನು ಪಡೆದನು.
23ನಾಹೋರನು ಹುಟ್ಟಿದ ಮೇಲೆ, ಸೆರೂಗನು ಇನ್ನೂರು
ವರ್ಷ ಬದುಕಿದ್ದನು. ಆ ಕಾಲದಲ್ಲಿ ಅವನು ಬೇರೆ ಗಂಡು
ಮಕ್ಕಳನ್ನು ಪಡೆದನು.
24ನಾಹೋರನಿಗೆ ಇಪ್ಪತ್ತೊಂಭತ್ತು ವರ್ಷದವನಾಗಿ
ದ್ದಾಗ ತೆರಹ ಎಂಬ ಮಗನನ್ನು ಪಡೆದನು. 25ತೆರಹನು
ಹುಟ್ಟಿದ ಮೇಲೆ ನಾಹೋರನು ನೂರ ಹತ್ತೊಂಭತ್ತು
ವರ್ಷ ಬದುಕಿದ್ದನು. ಆ ಕಾಲದಲ್ಲಿ ಅವನು ಬೇರೆ ಗಂಡು
ಮತ್ತು ಹೆಣ್ಣು ಮಕ್ಕಳನ್ನು ಪಡೆದನು.
26ತೆರಹನು ಎಪ್ಪತ್ತು ವರ್ಷದವನಾಗಿದ್ದಾಗ, ಅಬ್ರಾಮ,
ನಾಹೋರ, ಹಾರಾನ ಎಂಬ ಗಂಡು ಮಕ್ಕಳನ್ನು
ಪಡೆದನು.

### ತೆರಹನ ಕುಟುಂಬ ಚರಿತ್ರೆ

27ಇದು ತೆರಹನ ಕುಟುಂಬ ಚರಿತ್ರೆ. ತೆರಹನು
ಅಬ್ರಾಮ, ನಾಹೋರ ಮತ್ತು ಹಾರಾನ ಎಂಬವರ ತಂದೆ.
ಹಾರಾನನು ಲೋಟನ ತಂದೆ. 28ಹಾರಾನನು ಬಾಬಿ
ಲೋನಿನ ತನ್ನ ಸ್ವಂತ ಸ್ಥಳವಾದ ಊರ್ ಎಂಬಲ್ಲಿ ಸತ್ತು
ಹೋದನು. ಹಾರಾನನು ಸತ್ತಾಗ ಅವನ ತಂದೆ ಇನ್ನೂ
ಜೀವಂತವಾಗಿದ್ದನು. 29ಅಬ್ರಾಮ ಮತ್ತು ನಾಹೋರ
ಮದುವೆ ಮಾಡಿಕೊಂಡರು. ಅಬ್ರಾಮನ ಹೆಂಡತಿಯ
ಹೆಸರು ಸಾರಾಯಳು. ನೋಹೋರನ ಹೆಂಡತಿಯ
ಹೆಸರು ಮಿಲ್ಕಾ. ಈಕೆಯು ಹಾರಾನನ ಮಗಳು.
ಹಾರಾನನು ಮಿಲ್ಕಾ ಮತ್ತು ಇಸ್ಕ ಎಂಬವರ ತಂದೆ.
30ಸಾರಯಳಿಗೆ ಮಕ್ಕಳಿರಲಿಲ್ಲ, ಯಾಕಂದರೆ, ಆಕೆ
ಬಂಜೆಯಾಗಿದ್ದಳು.
31ತೆರಹನು ತನ್ನ ಕುಟುಂಬವನ್ನು ಕರೆದುಕೊಂಡು
ಬಾಬಿಲೋನಿನ ಊರ್ ಎಂಬ ಸ್ವಂತ ಸ್ಥಳದಿಂದ
ಹೊರಟು ಕಾನಾನಿಗೆ ಪ್ರಯಾಣ ಮಾಡಿದನು. ತೆರಹನು
ತನ್ನ ಮಗನಾದ ಅಬ್ರಾಮನನ್ನೂ ತನ್ನ ಮೊಮ್ಮಗನಾದ
ಲೋಟನನ್ನೂ (ಹಾರಾನನ ಮಗ) ಮತ್ತು ತನ್ನ ಸೊಸೆ
ಯಾದ ಸಾರಯಳನ್ನೂ (ಅಬ್ರಾಮನ ಹೆಂಡತಿ) ಕರೆದು
ಕೊಂಡು ಹಾರಾನ್ ಪಟ್ಟಣಕ್ಕೆ ಹೋಗಿ ಅಲ್ಲೇ ವಾಸಿಸಲು
ತೀರ್ಮಾನಿಸಿದರು. 32ತೆರಹನು ಇನ್ನೂರೈದು ವರ್ಷ
ಬದುಕಿ ಹಾರಾನಿನಲ್ಲಿ ಸತ್ತುಹೋದನು.

### ದೇವರು ಅಬ್ರಾಮನನ್ನು ಕರೆದದ್ದು

12 ಯೆಹೋವನು ಅಬ್ರಾಮನಿಗೆ,
‘‘ನಿನ್ನ ದೇಶವನ್ನೂ ನಿನ್ನ ಜನರನ್ನೂ ಬಿಟ್ಟು
ಹೊರಡು. ನಿನ್ನ ತಂದೆಯ ಕುಟುಂಬವನ್ನು ಬಿಟ್ಟು
ನಾನು ತೋರಿಸುವ ದೇಶಕ್ಕೆ ಹೋಗು.
2 ನಾನು ನಿನ್ನನ್ನು ಆಶೀರ್ವದಿಸುವೆನು; ನಿನ್ನನ್ನು
ದೊಡ್ಡ ಜನಾಂಗವನ್ನಾಗಿ ಮಾಡಿ ನಿನ್ನ ಹೆಸರನ್ನು
ಪ್ರಖ್ಯಾತಿ ಪಡಿಸುವೆನು; ನೀನು ಆಶೀರ್ವಾದ
ದಾಯಕ* ನಾಗುವಂತೆ ಮಾಡುವೆನು.
3 ನಿನಗೆ ಒಳ್ಳೆಯದನ್ನು ಮಾಡುವವರನ್ನು
ಆಶೀರ್ವದಿಸುವೆನು; ನಿನಗೆ ಕೇಡು ಮಾಡುವ
ವರನ್ನು ಶಿಕ್ಷಿಸುವೆನು. ನಿನ್ನ ನಿಮಿತ್ತವಾಗಿ ಲೋಕ
ದವರೆಲ್ಲರೂ ಆಶೀರ್ವಾದ ಹೊಂದುವರು’’
ಎಂದು ಹೇಳಿದನು.

### ಕಾನಾನಿಗೆ ಅಬ್ರಾಮನ ಪ್ರಯಾಣ

4ಆದ್ದರಿಂದ ಅಬ್ರಾಮನು ಯೆಹೋವನಿಗೆ ವಿಧೇಯ
ನಾದನು. ಅವನು ಹಾರಾನ್ ಪಟ್ಟಣವನ್ನು ಬಿಟ್ಟು
ಹೊರಟನು. ಅವನೊಡನೆ ಲೋಟನು ಸಹ ಹೋದನು.
ಆಗ ಅಬ್ರಾಮನಿಗೆ ಎಪ್ಪತ್ತೈದು ವರ್ಷ ವಯಸ್ಸಾಗಿತ್ತು.
5ಅಬ್ರಾಮನು ಹಾರಾನ್ ಪಟ್ಟಣವನ್ನು ಬಿಟ್ಟು ಒಬ್ಬಂಟಿ
ಗನಾಗಿ ಹೋಗಲಿಲ್ಲ. ಅಬ್ರಾಮನು ತನ್ನ ಹೆಂಡತಿಯಾದ
ಸಾರಾಯಳನ್ನೂ ತನ್ನ ತಮ್ಮನ ಮಗನಾದ ಲೋಟನನ್ನೂ
ತನ್ನೊಂದಿಗೆ ಕರೆದುಕೊಂಡು ಹೋದನು. ಹಾರಾನ್
ಪಟ್ಟಣದಲ್ಲಿ ತಮಗಿದ್ದ ಸ್ವತ್ತುಗಳನ್ನೆಲ್ಲ ಅವರು ತೆಗೆದು
ಕೊಂಡು ಹೋದರು. ಅಬ್ರಾಮನು ಹಾರಾನ್ ಪಟ್ಟಣ
ದಲ್ಲಿ ಹೊಂದಿದ್ದ ಸೇವಕರು ಸಹ ಅವನೊಡನೆ
ಹೋದರು. ಅಬ್ರಾಮನು ಮತ್ತು ಅವನ ಸಂಗಡಿಗರು
ಹಾರಾನ್ ಪಟ್ಟಣವನ್ನು ಬಿಟ್ಟು ಕಾನಾನ್ ದೇಶಕ್ಕೆ
ಪ್ರಯಾಣಮಾಡಿದರು.
6ಅಬ್ರಾಮನು ಕಾನಾನ್ ದೇಶದಲ್ಲಿ ಪ್ರಯಾಣವನ್ನು
ಮುಂದುವರಿಸಿದನು. ಅವನು ಶೆಕೆಮ್ ನಗರವನ್ನು
ತಲುಪಿ, ಅಲ್ಲಿಂದ ಮೋರೆ ಎಂಬ ದೊಡ್ಡ ಓಕ್ ಮರವಿದ್ದ
ಸ್ಥಳಕ್ಕೆ ಬಂದನು. ಆ ಕಾಲದಲ್ಲಿ ಕಾನಾನ್ಯರು ಆ ದೇಶದಲ್ಲಿ
ವಾಸವಾಗಿದ್ದರು.

---

**ಆಶೀರ್ವಾದದಾಯಕ** ಜನರು ಬೇರೆಯವರನ್ನು ನಿನ್ನ ಹೆಸರಿನಿಂದ ಆಶೀರ್ವದಿಸುವರು ಎಂಬರ್ಥವನ್ನೂ ಇದು ಕೊಡಬಲ್ಲದು.

[7]ಯೆಹೋವನು ಅಬ್ರಾಮನಿಗೆ ಕಾಣಿಸಿಕೊಂಡು,
‘‘ನಿನ್ನ ಸಂತತಿಯವರಿಗೆ ಈ ದೇಶವನ್ನು ಕೊಡುವೆನು’’
ಎಂದು ಹೇಳಿದನು.

ಆ ಸ್ಥಳದಲ್ಲಿ ಯೆಹೋವನು ಅಬ್ರಾಮನಿಗೆ ಕಾಣಿಸಿ
ಕೊಂಡನು. ಆದ್ದರಿಂದ ಅಬ್ರಾಮನು ಯೆಹೋವನನ್ನು
ಆರಾಧಿಸುವುದಕ್ಕಾಗಿ ಅಲ್ಲಿ ಒಂದು ಯಜ್ಞವೇದಿಕೆಯನ್ನು
ಕಟ್ಟಿದನು. [8]ಆಮೇಲೆ ಅಬ್ರಾಮನು ಆ ಸ್ಥಳದಿಂದ
ಹೊರಟು ಬೇತೇಲಿಗೆ ಪೂರ್ವದಲ್ಲಿರುವ ಗುಡ್ಡಗಳ ಬಳಿಗೆ
ಪ್ರಯಾಣ ಮಾಡಿದನು. ಅಲ್ಲಿ ಅಬ್ರಾಮನು ತನ್ನ ಗುಡಾರ
ಗಳನ್ನು ಹಾಕಿದನು. ಪಶ್ಚಿಮಕ್ಕೆ ಬೇತೇಲ್ ಪಟ್ಟಣವಿತ್ತು.
ಪೂರ್ವಕ್ಕೆ ಆಯಿ ಪಟ್ಟಣವಿತ್ತು. ಆ ಸ್ಥಳದಲ್ಲಿ ಅವನು
ಯೆಹೋವನಿಗೋಸ್ಕರ ಒಂದು ಯಜ್ಞವೇದಿಕೆಯನ್ನು
ಕಟ್ಟಿದನು. ಅಲ್ಲಿ ಅವನು ಯೆಹೋವನನ್ನು ಆರಾಧಿ
ಸಿದನು. [9]ತರುವಾಯ ಅವನು ಮತ್ತೆ ಪ್ರಯಾಣವನ್ನು
ಮುಂದುವರಿಸಿ ನೆಗೆವ್ ಸ್ಥಳದ ಕಡೆಗೆ ಹೋದನು.

## ಈಜಿಪ್ಟಿನಲ್ಲಿ ಅಬ್ರಾಮ

[10]ಈ ಕಾಲದಲ್ಲಿ ಭೂಮಿಯು ಒಣಗಿಹೋಗಿತ್ತು ; ಮಳೆ
ಇರಲಿಲ್ಲ. ಅಲ್ಲಿ ಆಹಾರವನ್ನು ಬೆಳೆಯಲು ಸಾಧ್ಯವಿರ
ಲಿಲ್ಲ. ಆದ್ದರಿಂದ ಅಬ್ರಾಮನು ವಾಸಿಸುವುದಕ್ಕಾಗಿ ಈಜಿ
ಪ್ಟಿಗೆ ಹೋದನು. [11]ತನ್ನ ಹೆಂಡತಿ ಸಾರಯಳು ರೂಪವತಿ
ಯಾಗಿರುವುದು ಅಬ್ರಾಮನಿಗೆ ತಿಳಿದಿತ್ತು. ಆದ್ದರಿಂದ
ಈಜಿಪ್ಟಿಗೆ ಹೋಗುವ ಮೊದಲೇ, ಅಬ್ರಾಮನು ಸಾರಯ
ಳಿಗೆ, ‘‘ನೀನು ರೂಪವತಿಯೆಂದು ನನಗೆ ಗೊತ್ತಿದೆ.
[12]ಈಜಿಪ್ಟಿನ ಗಂಡಸರು ನಿನ್ನನ್ನು ನೋಡಿ, ‘ಈಕೆ ಇವನ
ಹೆಂಡತಿ’ ಎಂದು ತಿಳಿದು ನಿನ್ನನ್ನು ಪಡೆದು ಕೊಳ್ಳುವುದ
ಕ್ಕಾಗಿ ನನ್ನನ್ನು ಕೊಂದು ನಿನ್ನನ್ನು ಜೀವಂತವಾಗಿ ಉಳಿಸು
ವರು. [13]ಆದ್ದರಿಂದ ನೀನು ನನಗೆ ತಂಗಿಯಾಗಬೇಕೆಂದು
ಜನರಿಗೆ ಹೇಳು. ಆಗ ಅವರು ನನ್ನನ್ನು ನಿನ್ನ ಸಹೋದರ
ನೆಂದು ಭಾವಿಸಿ ನನ್ನನ್ನು ಕೊಲ್ಲದೆ ನನಗೆ ದಯೆ
ತೋರುವರು. ಹೀಗೆ ನೀನು ನನ್ನ ಪ್ರಾಣ ಉಳಿಸುವೆ’’
ಎಂದು ಹೇಳಿದನು.

[14]ಅಂತೆಯೇ ಅಬ್ರಾಮನು ಈಜಿಪ್ಟಿಗೆ ಹೋದನು.
ಈಜಿಪ್ಟಿನ ಗಂಡಸರು ಸಾರಯಳನ್ನು ಕಂಡು ಈಕೆ ತುಂಬ
ರೂಪವತಿ ಎಂದರು. [15]ಈಜಿಪ್ಟಿನ ಕೆಲವು ನಾಯಕರು ಸಹ
ಆಕೆಯನ್ನು ಕಂಡರು. ಅವರು ಫರೋಹನ* ಬಳಿಗೆ
ಹೋಗಿ ಆಕೆಯ ಅಮೋಘ ಸೌಂದರ್ಯವನ್ನು ತಿಳಿಸಿ
ದರು. ಬಳಿಕ ಆ ನಾಯಕರು ಸಾರಯಳನ್ನು ಫರೋಹನ
ಬಳಿಗೆ ಕರೆದೊಯ್ದರು. [16]ಅಬ್ರಾಮನು ಸಾರಯಳ
ಸಹೋದರನೆಂದು ಭಾವಿಸಿ ಫರೋಹನು ಅಬ್ರಾಮನಿಗೆ
ದಯೆತೋರಿದನು. ಫರೋಹನು ಅಬ್ರಾಮನಿಗೆ ದನ
ಕುರಿಗಳನ್ನೂ ಕತ್ತೆಗಳನ್ನೂ ಕೊಟ್ಟನು. ಅಲ್ಲದೆ ಅಬ್ರಾಮ
ನಿಗೆ ದಾಸದಾಸಿಯರನ್ನೂ ಒಂಟೆಗಳನ್ನೂ ಕೊಟ್ಟನು.

[17]ಫರೋಹನು ಅಬ್ರಾಮನ ಹೆಂಡತಿಯನ್ನು ತೆಗೆದು
ಕೊಂಡದ್ದರಿಂದ ಯೆಹೋವನು ಫರೋಹನಿಗೂ ಅವನ
ಮನೆಯಲ್ಲಿದ್ದವರಿಗೂ ಭಯಂಕರವಾದ ರೋಗಗಳನ್ನು
ಬರಮಾಡಿದನು. [18]ಆಗ ಫರೋಹನು ಅಬ್ರಾಮನನ್ನು
ಕರೆಯಿಸಿ, ‘‘ನೀನು ನನಗೆ ತುಂಬ ಕೆಟ್ಟದ್ದನ್ನು ಮಾಡಿರುವೆ;
ಸಾರಯಳು ನಿನಗೆ ಹೆಂಡತಿಯಾಗಬೇಕೆಂದು ಯಾಕೆ ತಿಳಿ
ಸಲಿಲ್ಲ? [19]‘ಈಕೆ ನನಗೆ ತಂಗಿಯಾಗಬೇಕು’ ಎಂದು
ಯಾಕೆ ಹೇಳಿದೆ? ನೀನು ಹೀಗೆ ಹೇಳಿದ್ದರಿಂದ ನಾನು
ಆಕೆಯನ್ನು ನನ್ನ ಹೆಂಡತಿಯನ್ನಾಗಿ ತೆಗೆದುಕೊಂಡೆ. ಆದರೆ
ಈಗ ನಾನು ನಿನ್ನ ಹೆಂಡತಿಯನ್ನು ಮತ್ತೆ ನಿನಗೇ
ಕೊಡುತ್ತೇನೆ. ನೀನು ಆಕೆಯನ್ನು ನಿನ್ನೊಂದಿಗೆ ಕರೆದು
ಕೊಂಡು ಹೊರಟು ಹೋಗು’’ ಎಂದು ಹೇಳಿದನು.
[20]ಆಮೇಲೆ ಫರೋಹನು ತನ್ನ ಜನರಿಗೆ ಅಬ್ರಾಮನನ್ನು
ಈಜಿಪ್ಟಿನಿಂದ ಕಳುಹಿಸಿಕೊಡಬೇಕೆಂದು ಆಜ್ಞಾಪಿಸಿದನು.
ಆದ್ದರಿಂದ ಅಬ್ರಾಮನು ಮತ್ತು ಅವನ ಹೆಂಡತಿ ಆ ಸ್ಥಳ
ದಿಂದ ಹೊರಟುಹೋದರು; ಅವರು ತಮ್ಮೊಡನೆ ಇದ್ದವು
ಗಳನ್ನೆಲ್ಲ ತೆಗೆದುಕೊಂಡು ಹೋದರು.

## ಕಾನಾನಿಗೆ ಅಬ್ರಾಮನ ಮರುಪ್ರಯಾಣ

13 ಅಬ್ರಾಮನು ಈಜಿಪ್ಟಿನಿಂದ ಹೊರಟನು.
ಅಬ್ರಾಮನು ತನ್ನ ಹೆಂಡತಿಯನ್ನು ಕರೆದು
ಕೊಂಡು ತನ್ನವುಗಳನ್ನೆಲ್ಲಾ ತೆಗೆದುಕೊಂಡು ನೆಗೆವ್*
ಮೂಲಕ ಪ್ರಯಾಣ ಮಾಡಿದನು. ಲೋಟನು ಸಹ
ಅವರೊಡನೆ ಇದ್ದನು. [2]ಆಗ ಅಬ್ರಾಮನು ತುಂಬ
ಐಶ್ವರ್ಯವಂತನಾಗಿದ್ದನು. ಅವನಿಗೆ ಅನೇಕ ಪಶು
ಗಳಿದ್ದವು; ಬಹಳ ಬೆಳ್ಳಿಬಂಗಾರಗಳಿದ್ದವು.

[3]ಅಬ್ರಾಮನು ತನ್ನ ಪ್ರಯಾಣವನ್ನು ಮುಂದುವರಿಸಿ
ನೆಗೆವ್‌ವನ್ನು ಬಿಟ್ಟು ಬೇತೇಲಿಗೆ ಹಿಂತಿರುಗಿಹೋದನು.
ಅವನು ಬೇತೇಲ್ ನಗರಕ್ಕೂ ಆಯಿ ನಗರಕ್ಕೂ ಮಧ್ಯ
ದಲ್ಲಿರುವ ಸ್ಥಳಕ್ಕೆ ಹೋದನು. ಅಬ್ರಾಮನು ಮತ್ತು ಅವನ
ಕುಟುಂಬದವರು ಇಳಿದುಕೊಂಡಿದ್ದ ಸ್ಥಳವೇ ಇದು.
[4]ಅಬ್ರಾಮನು ಯಜ್ಞವೇದಿಕೆಯನ್ನು ಕಟ್ಟಿದ್ದು ಈ ಸ್ಥಳ
ದಲ್ಲೇ. ಅಬ್ರಾಮನು ಯೆಹೋವನನ್ನು ಆರಾಧಿಸಿದ್ದು ಈ
ಸ್ಥಳದಲ್ಲೇ.

## ಅಬ್ರಾಮನು ಮತ್ತು ಲೋಟನು ಅಗಲಿದ್ದು

[5]ಈ ಕಾಲದಲ್ಲಿ ಲೋಟನು ಸಹ ಅಬ್ರಾಮನೊಡನೆ
ಪ್ರಯಾಣ ಮಾಡುತ್ತಿದ್ದನು. ಲೋಟನಿಗೂ ಸಹ

---

**ಫರೋಹ** ಈಜಿಪ್ಟಿನ ರಾಜ.

**ನೆಗೆವ್** ದಕ್ಷಿಣ ಯೆಹೂದದ ಮರುಳುಗಾಡು ಪ್ರದೇಶ.

ಕುರಿಮಂದೆಗಳೂ ಪಶುಹಿಂಡುಗಳೂ ಗುಡಾರಗಳೂ
ಇದ್ದವು. 6ಅಬ್ರಾಮನಿಗೂ ಲೋಟನಿಗೂ ಬಹಳ ಪಶು
ಗಳಿದುದ್ದರಿಂದ ಅವುಗಳ ಪೋಷಣೆಗೆ ಆ ಸ್ಥಳವು ಸಾಕಾ
ಗಲಿಲ್ಲ. 7ಅಬ್ರಾಮನ ಮಂದೆಕಾಯುವವರು ಮತ್ತು
ಲೋಟನ ಮಂದೆಕಾಯುವವರು ವಾದಮಾಡಲಾರಂಭಿ
ಸಿದರು. ಆ ಕಾಲದಲ್ಲಿ ಕಾನಾನ್ಯರು ಮತ್ತು ಪೆರೆಜೀಯರು
ಸಹ ಆ ಸ್ಥಳದಲ್ಲಿ ವಾಸವಾಗಿದ್ದರು.

8ಆದ್ದರಿಂದ ಅಬ್ರಾಮನು ಲೋಟನಿಗೆ, ‘‘ನಿನಗೂ
ನನಗೂ ಯಾವ ವಾಗ್ವಾದವೂ ಇರಬಾರದು. ನಿನ್ನ
ಜನರೂ ನನ್ನ ಜನರೂ ವಾಗ್ವಾದ ಮಾಡಬಾರದು; ನಾವೆ
ಲ್ಲರೂ ಸಹೋದರರಾಗಿದ್ದೇವೆ. 9ನಾವು ಪ್ರತ್ಯೇಕ
ವಾಗೋಣ. ನಿನಗೆ ಬೇಕಾದ ಸ್ಥಳವನ್ನು ನೀನು ಆರಿಸಿಕೊ.
ನೀನು ಎಡಗಡೆಗೆ ಹೋಗುವುದಾದರೆ, ನಾನು ಬಲಗಡೆಗೆ
ಹೋಗುತ್ತೇನೆ. ನೀನು ಬಲಗಡೆಗೆ ಹೋಗುವುದಾದರೆ
ನಾನು ಎಡಗಡೆಗೆ ಹೋಗುತ್ತೇನೆ’’ ಎಂದು ಹೇಳಿದನು.

10ಲೋಟನು ಕಣ್ಣೆತ್ತಿ ನೋಡಿದಾಗ ಜೋರ್ಡನ್
ಕಣಿವೆಯೆಲ್ಲಾ ಕಾಣಿಸಿತು. ಅಲ್ಲಿ ಬೇಕಾದಷ್ಟು ನೀರಿರುವು
ದನ್ನು ಲೋಟನು ನೋಡಿದನು.(ಆ ಕಾಲದಲ್ಲಿ
ಸೊದೋಮ್ ಮತ್ತು ಗೊಮೋರ ಪಟ್ಟಣಗಳು
ಯೆಹೋವನಿಂದ ನಾಶವಾಗಿರಲಿಲ್ಲ. ಆ ಕಾಲದಲ್ಲಿ
ಜೋರ್ಡನ್ ಕಣಿವೆಯು ಚೋಗರ್ ತನಕ
ಯೆಹೋವನ ತೋಟದಂತಿತ್ತು. ಅದು ಈಜಿಪ್ಟಿನ ಭೂಮಿ
ಯಂತೆ ಫಲವತ್ತಾಗಿತ್ತು.) 11ಆದ್ದರಿಂದ ಲೋಟನು
ಜೋರ್ಡನ್ ಕಣಿವೆಯನ್ನೆಲ್ಲಾ ತನಗಾಗಿ ಆರಿಸಿ
ಕೊಂಡನು. ಅವರಿಬ್ಬರೂ ಪ್ರತ್ಯೇಕವಾದರು. ಲೋಟನು
ಪೂರ್ವದ ಕಡೆಗೆ ಪ್ರಯಾಣ ಮಾಡಿದನು. 12ಅಬ್ರಾಮನು
ಕಾನಾನ್ ಪ್ರದೇಶದಲ್ಲಿ ಉಳಿದುಕೊಂಡನು. ಲೋಟನು
ಕಣಿವೆಯಲ್ಲಿದ್ದ ಪಟ್ಟಣಗಳ ಮಧ್ಯದಲ್ಲಿ ವಾಸಿಸಿದನು;
ದಕ್ಷಿಣದಲ್ಲಿದ್ದ ಸೊದೋಮಿನವರೆಗೂ ಗುಡಾರಗಳನ್ನು
ಹಾಕಿಕೊಂಡು ಪಾಳೆಯ ಮಾಡಿಕೊಂಡನು. 13ಸೊದೋ
ಮಿನ ಜನರು ತುಂಬ ಕೆಟ್ಟವರಾಗಿದ್ದರು. ಅವರು ಯಾವಾ
ಗಲೂ ಯೆಹೋವನಿಗೆ ವಿರೋಧವಾಗಿ ಪಾಪ
ಮಾಡುತ್ತಿದ್ದರು.

14ಲೋಟನು ಹೊರಟುಹೋದ ಮೇಲೆ
ಯೆಹೋವನು ಅಬ್ರಾಮನಿಗೆ, ‘‘ಸುತ್ತಲೂ ನೋಡು,
ಉತ್ತರದಕ್ಷಿಣಗಳ ಕಡೆಗೂ ಪೂರ್ವಪಶ್ಚಿಮಗಳ ಕಡೆಗೂ
ನೋಡು. 15ನೀನು ನೋಡುವ ಈ ದೇಶವನ್ನೆಲ್ಲಾ
ನಿನಗೂ ನಿನ್ನ ನಂತರ ಜೀವಿಸುವ ನಿನ್ನ ಸಂತತಿಯವರಿಗೂ
ಕೊಡುತ್ತೇನೆ. ಇದು ಎಂದೆಂದಿಗೂ ನಿನ್ನದಾಗಿರುವುದು.
16ನಾನು ನಿನ್ನ ಜನರನ್ನು ಭೂಮಿಯ ಧೂಳಿನಷ್ಟು ಹೆಚ್ಚಿಸು
ವೆನು. ಯಾವನಾದರೂ ಭೂಮಿಯ ಮೇಲಿರುವ
ಧೂಳಿನ ಕಣಗಳನ್ನು ಲೆಕ್ಕಮಾಡಬಹುದಾದರೆ ನಿನ್ನ
ಸಂತತಿಯವರ ಸಂಖ್ಯೆಯು ಅದರಷ್ಟೇ ಇರುವುದು.
17ಆದ್ದರಿಂದ ಹೋಗು, ನಿನ್ನ ಭೂಮಿಯಲ್ಲೆಲ್ಲಾ ತಿರು
ಗಾಡು. ಅದರ ಉದ್ದಗಲಗಳಲ್ಲೆಲ್ಲಾ ತಿರುಗಾಡು;
ಯಾಕಂದರೆ ನಾನು ಅದನ್ನು ನಿನಗೆ ಕೊಡುತ್ತೇನೆ’’ ಎಂದು
ಹೇಳಿದನು.

18ಆದ್ದರಿಂದ ಅಬ್ರಾಮನು ತನ್ನ ಗುಡಾರಗಳನ್ನು
ಕೀಳಿಸಿ, ದೊಡ್ಡ ಮರಗಳಿರುವ ಮಮ್ರೆಯ ಸಮೀಪಕ್ಕೆ
ಹೋಗಿ ವಾಸಿಸತೊಡಗಿದನು. ಇದು ಹೆಬ್ರೋನ್ ನಗ
ರಕ್ಕೆ ಸಮೀಪದಲ್ಲಿತ್ತು. ಆ ಸ್ಥಳದಲ್ಲಿ ಅಬ್ರಾಮನು
ಯೆಹೋವನನ್ನು ಆರಾಧಿಸವುದಕ್ಕಾಗಿ ಯಜ್ಞವೇದಿಕೆ
ಯನ್ನು ಕಟ್ಟಿದನು.

## ಲೋಟನ ಸೆರೆ

14 ಅಮ್ರಾಫೆಲನು ಶಿನಾರಿನ ರಾಜನಾಗಿದ್ದನು;
ಅರಿಯೋಕನು ಎಲ್ಲಸಾರಿನ ರಾಜನಾಗಿದ್ದನು;
ಕೆದೊರ್ಲಗೋಮರನು ಏಲಾಮಿನ ರಾಜನಾಗಿದ್ದನು;
ತಿದ್ಗಾಲನು ಗೋಯಿಮದ ರಾಜನಾಗಿದ್ದನು. 2ಈ
ರಾಜರುಗಳೆಲ್ಲ ಸೊದೋಮಿನ ರಾಜನಾದ ಬೆರಗನಿಗೂ
ಗೊಮೋರದ ರಾಜನಾದ ಬಿರ್ಶಗನಿಗೂ ಅದ್ಮಾಹದ
ರಾಜನಾದ ಶಿನಾಬನಿಗೂ ಚೆಬೋಯೀಮಿನ ರಾಜನಾದ
ಶೆಮೇಬರನಿಗೂ ಬೇಲಗಿನ ರಾಜನಿಗೂ (ಬೇಲಗಕ್ಕೆ
ಚೋಗರ್ ಎಂತಲೂ ಕರೆಯುತ್ತಾರೆ.) ವಿರುದ್ಧವಾಗಿ
ಯುದ್ಧಮಾಡಿದರು.

3ಈ ರಾಜರುಗಳೆಲ್ಲ ಸಿದ್ದೀಮ್ ಕಣಿವೆಯಲ್ಲಿ ತಮ್ಮ
ಸೈನ್ಯಗಳನ್ನು ಒಟ್ಟಿಗೆ ಸೇರಿಸಿದರು (ಸಿದ್ದೀಮ್ ಕಣಿವೆಯು
ಈಗ ಉಪ್ಪು ಸಮುದ್ರವಾಗಿದೆ). 4ಈ ರಾಜರುಗಳು
ಕೆದೊರ್ಲಗೋಮರನ ಅಧೀನದಲ್ಲಿ ಹನ್ನೆರಡು ವರ್ಷ
ವಿದ್ದರು. ಆದರೆ ಹದಿಮೂರನೆಯ ವರ್ಷದಲ್ಲಿ, ಅವರೆ
ಲ್ಲರೂ ಅವನಿಗೆ ವಿರೋಧವಾಗಿ ದಂಗೆ ಎದ್ದರು. 5ಆದ್ದ
ರಿಂದ ಹದಿನಾಲ್ಕನೆಯ ವರ್ಷದಲ್ಲಿ, ರಾಜನಾದ
ಕೆದೊರ್ಲಗೋಮರನು ಮತ್ತು ಅವನೊಡನಿದ್ದ
ರಾಜರುಗಳು ಅವರ ವಿರೋಧವಾಗಿ ಯುದ್ಧ ಮಾಡಲು
ಬಂದರು. ಕೆದೊರ್ಲಗೋಮರನು ಮತ್ತು ಅವನೊಡ
ನಿದ್ದ ರಾಜರಗುಳು ಅಷ್ಟರೋತ್ಕರ್ನಯಿಮಿನಲ್ಲಿದ್ದ
ರೆಫಾಯರನ್ನೂ ಹಾಮಿನಲ್ಲಿದ್ದ ಜೂಜ್ಯರನ್ನೂ ಶಾವೆಕೆ
ರ್ಯಾತಯಿಮಿನಲ್ಲಿದ್ದ ಏಮಿಯರನ್ನೂ ಸೋಲಿಸಿದರು.
6ಇದಲ್ಲದೆ ಅವರು ಹೋರಿಯರನ್ನು ಬೆಟ್ಟದ ಸೀಮೆ
ಯಿಂದ ಎಲ್ಪಾರಾನಿನವರೆಗೂ ಹಿಂದಟ್ಟಿದರು.
(ಎಲ್ಪಾರಾನ್ ಮರುಭೂಮಿಯ ಸಮೀಪದಲ್ಲಿದೆ.) 7ಆ
ಬಳಿಕ ರಾಜ ಕೆದೊರ್ಲಗೋಮರನು ಉತ್ತರದ ಕಡೆಗೆ
ತಿರುಗಿ ಎನ್ಮಿಷ್ಪಾಟಿಗೆ (ಕಾದೇಶ್) ಬಂದು ಎಲ್ಲಾ
ಅಮಾಲೇಕ್ಯರನ್ನು ಸೋಲಿಸಿದನು. ಇದಲ್ಲದೆ ಅವನು

ಹಚಚೋನ್ ತಾಮರಿನಲ್ಲಿ ವಾಸವಾಗಿದ್ದ
ಅಮೋರಿಯರನ್ನು ಸೋಲಿಸಿದನು.
8ಆ ಕಾಲದಲ್ಲಿ, ಸೊದೋಮಿನ ರಾಜನೂ
ಗೊಮೋರದ ರಾಜನೂ ಅದ್ಮಾಹದ ರಾಜನೂ
ಚೆಬೋಯೀಮಿನ ರಾಜನೂ ಬೇಲಗದ (ಚೋಗರದ)
ರಾಜನೂ ಒಟ್ಟಾಗಿ ಸೇರಿಕೊಂಡು ತಮ್ಮ ಶತ್ರುಗಳ
ವಿರುದ್ಧವಾಗಿ ದಂಡೆತ್ತಿಕೊಂಡು ಸಿದ್ದೀಮ್ ಕಣಿವೆಗೆ
ಹೋದರು. 9ಅವರು ಏಲಾಮಿನ ರಾಜ ಕೆದೊರ್ಲ
ಗೋಮರನಿಗೂ ಗೋಯಿಮದ ರಾಜ ತಿದ್ಗಾಲನಿಗೂ
ಶಿನಾರಿನ ರಾಜ ಅಮ್ರಾಫೆಲನಿಗೂ, ಎಲ್ಲಸಾರಿನ ರಾಜ
ಅರಿಯೋಕನಿಗೂ ವಿರುದ್ಧವಾಗಿ ಹೋರಾಡಿದರು. ಹೀಗೆ
ನಾಲ್ಕು ಮಂದಿ ರಾಜರು ಐದು ಮಂದಿ ರಾಜರ
ವಿರುದ್ಧವಾಗಿ ಹೋರಾಡಿದರು.
10ಸಿದ್ದೀಮ್ ಕಣಿವೆಯಲ್ಲಿ ಕಲ್ಲರಗಿನ ಕೆಸರುಕುಣಿಗಳು
ಬಹಳಷ್ಟಿದ್ದವು. ಸೊದೋಮ್ ಮತ್ತು ಗೊಮೋರಗಳ
ರಾಜರುಗಳು ಮತ್ತು ಅವರ ಸೈನ್ಯಗಳವರು ಓಡಿ ಹೋಗು
ವಾಗ ಈ ಕುಣಿಗಳಲ್ಲಿ ಬಿದ್ದುಹೋದರು; ಉಳಿದವರು
ಬೆಟ್ಟಗಳಿಗೆ ಓಡಿಹೋದರು.
11ಗೆದ್ದವರು ಸೊದೋಮ್ ಮತ್ತು ಗೊಮೋರಗಳ
ಜನರು ಹೊಂದಿದ್ದ ಎಲ್ಲಾ ವಸ್ತುಗಳನ್ನು ತೆಗೆದು
ಕೊಂಡರು. ಅವರು ಅವರೆಲ್ಲರ ಆಹಾರವನ್ನೂ ಬಟ್ಟೆಗ
ಳನ್ನೂ ತೆಗೆದುಕೊಂಡರು. 12ಅಬ್ರಾಮನ ಸಹೋದರ
ನಾದ ಲೋಟನು ಸೊದೋಮಿನಲ್ಲಿ ವಾಸವಾಗಿದ್ದನು.
ಶತ್ರುಗಳು ಅವನನ್ನು ಸೆರೆಹಿಡಿದು, ಅವನ ಸ್ವತ್ತುಗಳನ್ನೆಲ್ಲ
ದೋಚಿಕೊಂಡು ಹೋದರು. 13ತಪ್ಪಿಸಿಕೊಂಡ ಒಬ್ಬನು
ಇಬ್ರಿಯನಾದ ಅಬ್ರಾಮನ ಬಳಿಗೆ ಹೋಗಿ ನಡೆದ ವಿಷ
ಯವನ್ನೆಲ್ಲಾ ತಿಳಿಸಿದನು. ಅಬ್ರಾಮನು ಅಮೋರಿಯ
ನಾದ ಮಮ್ರೆಯನ ತೋಪಿನ ಬಳಿಯಲ್ಲಿ ವಾಸವಾಗಿ
ದ್ದನು. ಮಮ್ರೆ, ಎಷ್ಕೋಲ ಮತ್ತು ಆನೇರ್ ಒಬ್ಬರಿ
ಗೊಬ್ಬರು ಸಹಾಯಮಾಡಲು ಒಂದು ಒಡಂಬಡಿಕೆ
ಯನ್ನು ಮಾಡಿಕೊಂಡಿದ್ದರು. ಅಲ್ಲದೆ ಅಬ್ರಾಮನಿಗೂ
ಸಹಾಯಮಾಡುವುದಾಗಿ ಒಂದು ಒಡಂಬಡಿಕೆಗೆ ಸಹಿ
ಮಾಡಿದ್ದರು.

## ಅಬ್ರಾಮನು ಲೋಟನನ್ನು ಬಿಡಿಸಿದ್ದು

14ಲೋಟನು ಸೆರೆಯಾಳಾಗಿರುವುದು ಅಬ್ರಾಮನಿಗೆ
ತಿಳಿಯಿತು. ಆದ್ದರಿಂದ ಅಬ್ರಾಮನು ತನ್ನ ಮನೆಯಲ್ಲಿ
ಹುಟ್ಟಿದ ಗಂಡಾಳುಗಳನ್ನೆಲ್ಲ ಒಟ್ಟಾಗಿ ಸೇರಿಸಿದನು. ಅವ
ರಲ್ಲಿ ಮುನ್ನೂರ ಹದಿನೆಂಟು ಮಂದಿ ತರಬೇತಿ ಹೊಂದಿದ್ದ
ಸೈನಿಕರಾಗಿದ್ದರು. ಅಬ್ರಾಮನು ಅವರೊಡನೆ ಹೊರಟು
ಶತ್ರುಗಳನ್ನು ದಾನ್ ಊರಿನವರೆಗೂ ಹಿಂದಟ್ಟಿದನು.
15ಆ ರಾತ್ರಿ ಅವನು ಮತ್ತು ಅವನ ಸೇವಕರು ಹಠಾತ್ತನೆ
ಶತ್ರುಗಳನ್ನು ಎದುರಿಸಿ ಸೋಲಿಸಿದರು; ದಮಸ್ಕಕ್ಕೆ ಉತ್ತರ
ದಲ್ಲಿರುವ ಹೋಬಾದವರೆಗೂ ಹಿಂದಟ್ಟಿದರು.
16ಆಮೇಲೆ ಶತ್ರುಗಳು ಅಪಹರಿಸಿದ್ದ ಎಲ್ಲಾ ವಸ್ತುಗಳನ್ನು
ಮತ್ತು ಲೋಟನ ಆಸ್ತಿಯನ್ನು ಅಬ್ರಾಮನು ತೆಗೆದು
ಕೊಂಡು ಲೋಟನೊಡನೆ ಬಂದನು. ಅಲ್ಲದೆ ಸೆರೆ
ಹಿಡಿಯಲ್ಪಟ್ಟಿದ್ದ ಸ್ತ್ರೀಯರನ್ನು ಮತ್ತು ಇತರ ಜನರನ್ನು
ಹಿಂದಕ್ಕೆ ಕರೆದುಕೊಂಡು ಬಂದನು. 17ಅಬ್ರಾಮನು
ಕೆದೊರ್ಲಗೋಮರನನ್ನೂ ಮತ್ತು ಅವನೊಡನಿದ್ದ
ರಾಜರುಗಳನ್ನೂ ಸೋಲಿಸಿದ ಮೇಲೆ ತನ್ನ ಮನೆಗೆ
ಹಿಂತಿರುಗಿದನು. ಆಗ ಸೊದೋಮಿನ ರಾಜನು ಅಬ್ರಾಮ
ನನ್ನು ಭೇಟಿಯಾಗಲು ಶಾವೆ ಕಣಿವೆಗೆ ಹೋದನು. (ಈಗ
ಇದಕ್ಕೆ 'ರಾಜನ ಕಣಿವೆ' ಎಂದು ಕರೆಯುತ್ತಾರೆ.)

## ಮೆಲ್ಕೀಚೆದೆಕನು

18ಸಾಲೇಮಿನ ರಾಜನಾದ ಮೆಲ್ಕೀಚೆದೆಕನು ಸಹ
(ಅಬ್ರಾಮನನ್ನು ಭೇಟಿಯಾಗಲು) ಹೋದನು.
ಮಹೋನ್ನತನಾದ ದೇವರ ಯಾಜಕನಾಗಿದ್ದ ಅವನು
ರೊಟ್ಟಿಯನ್ನೂ ದ್ರಾಕ್ಷಾರಸವನ್ನೂ ತೆಗೆದುಕೊಂಡು
ಬಂದು, 19ಅಬ್ರಾಮನನ್ನು ಹೀಗೆ ಆಶೀರ್ವದಿಸಿದನು:

‘‘ಅಬ್ರಾಮನೇ, ಮಹೋನ್ನತನಾದ ದೇವರು
ನಿನ್ನನ್ನು ಆಶೀರ್ವದಿಸಲಿ. ಆಕಾಶವನ್ನೂ ಭೂಮಿ
ಯನ್ನೂ ಸೃಷ್ಟಿಸಿದಾತನು ಆತನೇ.
20 ನಿನ್ನ ಶತ್ರುಗಳನ್ನು ಸೋಲಿಸಲು ನಿನಗೆ ಸಹಾಯ
ಮಾಡಿದ ಮಹೋನ್ನತನಾದ ದೇವರಿಗೆ
ಕೊಂಡಾಟವಾಗಲಿ.’’

ಅಬ್ರಾಮನು ಯುದ್ಧದಿಂದ ತಂದಿದ್ದ ಎಲ್ಲಾ ವಸ್ತು
ಗಳಲ್ಲಿ ಹತ್ತನೆಯ ಒಂದು ಭಾಗವನ್ನು ಮೆಲ್ಕೀಚೆದೆಕನಿಗೆ
ಕೊಟ್ಟನು. 21ಬಳಿಕ ಸೊದೋಮಿನ ರಾಜನು ಅಬ್ರಾಮ
ನಿಗೆ, ‘‘ಈ ವಸ್ತುಗಳನ್ನೆಲ್ಲ ನೀನೇ ಇಟ್ಟುಕೊ. ಶತ್ರುಗಳು
ವಶಪಡಿಸಿಕೊಂಡಿರುವ ನನ್ನ ಜನರನ್ನು ಮಾತ್ರ ನನಗೆ
ಕೊಡು’’ ಎಂದು ಹೇಳಿದನು.
22ಆದರೆ ಅಬ್ರಾಮನು ಅವನಿಗೆ, ‘‘ಆಕಾಶವನ್ನೂ
ಭೂಮಿಯನ್ನೂ ಸೃಷ್ಟಿಸಿದ ಮಹೋನ್ನತನಾಗಿರುವ ದೇವ
ರಾದ ಯೆಹೋವನಿಗೆ ಪ್ರಮಾಣಮಾಡಿ ಹೇಳುವುದ್ದೇ
ನಂದರೆ, 23ನಿನ್ನದಾಗಿರುವ ಯಾವುದನ್ನೂ ನಾನು ಇಟ್ಟು
ಕೊಳ್ಳುವುದಿಲ್ಲ; ಅದು ದಾರವಾಗಿದ್ದರೂ, ಪಾದರಕ್ಷೆಯ
ಬಾರಾಗಿದ್ದರೂ, ನಾನಿಟ್ಟುಕೊಳ್ಳುವುದಿಲ್ಲ. 'ನಾನು
ಅಬ್ರಾಮನನ್ನು ಐಶ್ವರ್ಯವಂತನನ್ನಾಗಿ ಮಾಡಿದೆ'
ಎಂದು ನೀನು ಹೇಳಿಕೊಳ್ಳುವುದು ನನಗೆ ಬೇಕಾಗಿಲ್ಲ.
24ನನ್ನ ಯೌವನಸ್ಥರು ತಿಂದ ಆಹಾರದ ಹೊರತು ಬೇರೆ

ಯಾವುದನ್ನೂ ನಾನು ಸ್ವೀಕರಿಸುವುದಿಲ್ಲ. ಆದರೆ ಬೇರೆ ಜನರಿಗೆ ಅವರ ಪಾಲನ್ನು ಕೊಡು. ನಾವು ಯುದ್ಧದಲ್ಲಿ ಗೆದ್ದುತಂದ ವಸ್ತುಗಳನ್ನು ತೆಗೆದುಕೋ; ಆನೇರ್, ಎಷ್ಕೋಲ ಮತ್ತು ಮಮ್ರೆಯರಿಗೆ ಅವರ ಪಾಲನ್ನು ಕೊಡು. ಈ ಜನರು ಯುದ್ಧದಲ್ಲಿ ನನಗೆ ಸಹಾಯ ಮಾಡಿದರು'' ಎಂದು ಹೇಳಿದನು.

## ದೇವರು ಅಬ್ರಾಮನೊಡನೆ ಮಾಡಿಕೊಂಡ ಒಡಂಬಡಿಕೆ

15 ಈ ಸಂಗತಿಗಳಾದ ಮೇಲೆ, ಅಬ್ರಾಮನಿಗೆ
ದರ್ಶನದಲ್ಲಿ ಯೆಹೋವನ ಸಂದೇಶ ಬಂದಿತು.
ದೇವರು ಅವನಿಗೆ, ''ಅಬ್ರಾಮನೇ ಭಯಪಡಬೇಡ;
ನಾನೇ ನಿನಗೆ ಗುರಾಣಿಯಾಗಿದ್ದೇನೆ. ನಾನು ನಿನಗೆ
ದೊಡ್ಡ ಪ್ರತಿಫಲವನ್ನು ಕೊಡುತ್ತೇನೆ'' ಎಂದು
ಹೇಳಿದನು.
2ಅದಕ್ಕೆ ಅಬ್ರಾಮನು, ''ದೇವರಾದ ಯೆಹೋವನೇ,
ನೀನು ನನಗೆ ಏನೇ ಕೊಟ್ಟರೂ ನನಗೆ ಸಂತೋಷ
ವಾಗುವುದಿಲ್ಲ. ಯಾಕಂದರೆ, ನನಗೆ ಮಗನೇ ಇಲ್ಲ. ಆದ್ದ
ರಿಂದ ನಾನು ಸತ್ತಮೇಲೆ ನನ್ನ ಆಸ್ತಿಯೆಲ್ಲ ನನ್ನ ಸೇವಕ
ನಾದ ದಮಸ್ಕದ ಎಲೀಯೆಜರನ ಪಾಲಾಗುವುದು''
ಎಂದು ಹೇಳಿದನು. 3ಮತ್ತೆ ಅಬ್ರಾಮನು, ''ನೀನು ನನಗೆ
ಮಗನನ್ನೇ ಕೊಟ್ಟಿಲ್ಲ. ಆದ್ದರಿಂದ ನನ್ನ ಮನೆಯಲ್ಲಿ
ಹುಟ್ಟಿದ ಸೇವಕನೊಬ್ಬನು ನನಗಿರುವುದನ್ನೆಲ್ಲ ಪಡೆದು
ಕೊಳ್ಳುವನು'' ಎಂದು ಹೇಳಿದನು.
4ಆಗ ಯೆಹೋವನು ಅಬ್ರಾಮನಿಗೆ, ''ನಿನ್ನ ಆಸ್ತಿಯ
ನ್ನೆಲ್ಲ ಪಡೆದುಕೊಳ್ಳುವವನು ನಿನ್ನ ಸೇವಕನಲ್ಲ. ನೀನೇ
ಮಗನನ್ನು ಪಡೆಯುವೆ; ನಿನ್ನ ಮಗನೇ ನಿನ್ನ ಆಸ್ತಿಯನ್ನೆಲ್ಲಾ
ಪಡೆಯುವನು'' ಎಂದು ಹೇಳಿದನು.
5ನಂತರ ದೇವರು ಅಬ್ರಾಮನನ್ನು ಹೊರಗೆ ಕರೆದು
ಕೊಂಡು ಬಂದು ಅವನಿಗೆ, ''ಆಕಾಶದ ಕಡೆಗೆ ಕಣ್ಣೆತ್ತಿ
ನಕ್ಷತ್ರಗಳನ್ನು ನೋಡು. ನೀನು ಲೆಕ್ಕ ಮಾಡಲಾರದಷ್ಟು
ನಕ್ಷತ್ರಗಳಿವೆ. ಮುಂದಿನ ಕಾಲದಲ್ಲಿ ನಿನ್ನ ಕುಟುಂಬವು
ಅದೇ ರೀತಿಯಲ್ಲಿರುವುದು'' ಎಂದು ಹೇಳಿದನು.
6ಅಬ್ರಾಮನು ದೇವರನ್ನು ನಂಬಿದನು. ದೇವರು ಆ
ನಂಬಿಕೆಯ ನಿಮಿತ್ತ ಅಬ್ರಾಮನನ್ನು ನೀತಿವಂತನೆಂದು
ಪರಿಗಣಿಸಿದನು. 7ದೇವರು ಅಬ್ರಾಮನಿಗೆ, ''ಯೆಹೋವ
ನಾದ ನಾನು ನಿನ್ನನ್ನು ಕಲ್ದೀಯರ ಊರ್ ಪಟ್ಟಣದಿಂದ
ಬರಮಾಡಿದೆನು. ನಿನಗೆ ಈ ದೇಶವನ್ನು ಕೊಡ
ಬೇಕೆಂತಲೂ ನೀನು ಈ ದೇಶವನ್ನು ಹೊಂದಿಕೊಳ್ಳ
ಬೇಕೆಂತಲೂ ನಾನು ನಿನ್ನನ್ನು ಬರಮಾಡಿದೆನು'' ಎಂದು
ಹೇಳಿದನು.
8ಅದಕ್ಕೆ ಅಬ್ರಾಮನು, ''ಯೆಹೋವನೇ, ನನ್ನ ಒಡೆ
ಯನೇ, ನನಗೆ ಈ ದೇಶವು ದೊರೆಯುತ್ತದೆಯೆಂದು
ಖಚಿತಪಡಿಸಿಕೊಳ್ಳುವುದು ಹೇಗೆ?'' ಎಂದು ಕೇಳಿದನು.
9ದೇವರು ಅಬ್ರಾಮನಿಗೆ, ''ನಾವು ಒಂದು ಒಡಂಬಡಿಕೆ
ಯನ್ನು ಮಾಡಿಕೊಳ್ಳೋಣ. ಮೂರು ವರ್ಷದ ಒಂದು
ಹಸುವನ್ನೂ ಮೂರು ವರ್ಷದ ಒಂದು ಆಡನ್ನೂ ಮತ್ತು
ಮೂರು ವರ್ಷದ ಒಂದು ಟಗರನ್ನೂ ತೆಗೆದುಕೊಂಡು
ಬಾ. ಇದಲ್ಲದೆ ಒಂದು ಬೆಳವಕ್ಕಿಯನ್ನೂ ಒಂದು ಪಾರಿ
ವಾಳವನ್ನೂ ತೆಗೆದುಕೊಂಡು ಬಾ'' ಎಂದು ಹೇಳಿದನು.
10ಅಬ್ರಾಮನು ದೇವರಿಗೋಸ್ಕರ ಅವುಗಳನ್ನೆಲ್ಲ
ತೆಗೆದುಕೊಂಡು ಬಂದನು. ಅಬ್ರಾಮನು ಅವುಗಳನ್ನು
ಕತ್ತರಿಸಿ ಎರಡೆರಡು ಹೋಳು ಮಾಡಿದನು. ಆ ಮೇಲೆ
ಅಬ್ರಾಮನು ತುಂಡಿಗೆ ತುಂಡನ್ನು ಎದುರಾಗಿಟ್ಟನು.
ಅಬ್ರಾಮನು ಪಕ್ಷಿಗಳನ್ನು ಮಾತ್ರ ಎರಡೆರಡು ಹೋಳು
ಮಾಡಲಿಲ್ಲ. 11ಸ್ವಲ್ಪ ಸಮಯದ ನಂತರ, ದೊಡ್ಡ
ಪಕ್ಷಿಗಳು ಆ ಪ್ರಾಣಿಗಳ ಮಾಂಸವನ್ನು ತಿನ್ನಲು ಹಾರಿ
ಬಂದವು. ಆದರೆ ಅಬ್ರಾಮನು ಅವುಗಳನ್ನು ಓಡಿಸಿ
ಬಿಟ್ಟನು.
12ಸಾಯಂಕಾಲವಾಯಿತು, ಸೂರ್ಯ ಮುಳುಗತೊಡ
ಗಿದನು. ಅಬ್ರಾಮನಿಗೆ ಗಾಢ ನಿದ್ರೆ ಬಂದಿತು. ಅವನು
ನಿದ್ರೆ ಮಾಡುತ್ತಿರುವಾಗ ಕಾರ್ಗತ್ತಲಾಯಿತು. 13ಆಗ
ಯೆಹೋವನು ಅಬ್ರಾಮನಿಗೆ, ''ನಿನಗೆ ಈ ವಿಷಯಗಳು
ತಿಳಿದಿರಬೇಕು. ನಿನ್ನ ಸಂತತಿಯವರು ಪರದೇಶಿಯರಾಗಿ
ತಮ್ಮದಲ್ಲದ ದೇಶದಲ್ಲಿ ವಾಸಮಾಡುವರು. ಅಲ್ಲಿನ
ಜನರು ಅವರನ್ನು ಗುಲಾಮರನ್ನಾಗಿ ಮಾಡಿಕೊಳ್ಳುವರು.
ಅಲ್ಲಿ ಅವರು ನಾನೂರು ವರ್ಷಗಳವರೆಗೆ ಬಾಧೆಪಡು
ವರು. 14ಆದರೆ ನಾನೂರು ವರ್ಷಗಳಾದ ಮೇಲೆ ಅವರ
ಮೇಲೆ ದೊರೆತನ ಮಾಡಿದ ಆ ದೇಶವನ್ನು ನಾನು
ದಂಡಿಸುವೆನು; ನಿನ್ನ ಜನರು ಆ ದೇಶವನ್ನು ಬಿಟ್ಟು ಹೊರ
ಡುವರು. ನಿನ್ನ ಜನರು ಅದನ್ನು ಬಿಡುವಾಗ ತಮ್ಮೊಡನೆ
ಸಂಪತ್ತುಗಳನ್ನು ತೆಗೆದುಕೊಂಡು ಹೋಗುವರು.
15''ನೀನು ತುಂಬಾ ಮುದುಕನಾಗುವ ತನಕ ಜೀವಿಸಿ
ಸಮಾಧಾನದಿಂದ ಸಾಯುವೆ; ನಿನ್ನನ್ನು ನಿನ್ನ ಕುಟುಂಬ
ದವರೊಡನೆ ಸಮಾಧಿ ಮಾಡುವರು. 16ನಾಲ್ಕು ತಲೆ
ಮಾರುಗಳ ನಂತರ ನಿನ್ನ ಜನರು ಈ ನಾಡಿಗೆ ಹಿಂತಿರುಗು
ವರು. ಆ ಕಾಲದಲ್ಲಿ ನಿನ್ನ ಜನರು ಅಮೋರಿಯರನ್ನು
ಸೋಲಿಸುವರು. ಇಲ್ಲಿ ವಾಸಿಸುತ್ತಿರುವ ಅಮೋರಿಯ
ರನ್ನು ನಿನ್ನ ಜನರ ಮೂಲಕ ನಾನೇ ಶಿಕ್ಷಿಸುವೆನು. ಇದು
ಮುಂದೆ ನಡೆಯುವ ಸಂಗತಿ. ಯಾಕಂದರೆ ಆವಾಗ
ಅಮೋರಿಯರು ಅಂಥ ಶಿಕ್ಷೆ ಅನುಭವಿಸುವಷ್ಟು ಕೆಟ್ಟ
ವರಾಗಿರಲಿಲ್ಲ'' ಎಂದು ಹೇಳಿದನು.
17ಸೂರ್ಯನು ಮುಳುಗಿದ ಮೇಲೆ ತುಂಬ ಕತ್ತಲಾ
ಯಿತು. ಕಡಿದುಹಾಕಿದ್ದ ಪ್ರತಿಯೊಂದು ಪ್ರಾಣಿಗಳ
ದೇಹದ ಎರಡೆರಡು ಹೋಳುಗಳು ಇನ್ನೂ ನೆಲದ ಮೇಲೆ

ಇದ್ದವು. ಆ ಸಮಯದಲ್ಲಿ ಇದ್ದಕ್ಕಿದ್ದಂತೆ ಹೊಗೆ ಮತ್ತು
ಬೆಂಕಿಗಳಿಂದ ಕೂಡಿದ ದೀವಿಟಿಗೆಯು ಈ ತುಂಡುಗಳ
ನಡುವೆ ಹಾದುಹೋಯಿತು.
18ಆದ್ದರಿಂದ ಅಂದು ಯೆಹೋವನು ಒಂದು ವಾಗ್ದಾನ
ವನ್ನು ಮಾಡಿ ಅಬ್ರಾಮನೊಡನೆ ಒಂದು ಒಡಂಬಡಿಕೆ
ಯನ್ನು ಮಾಡಿಕೊಂಡನು. ಯೆಹೋವನು ಅವನಿಗೆ,
''ನಾನು ನಿನ್ನ ಸಂತತಿಯವರಿಗೆ ಈ ನಾಡನ್ನು ಕೊಡುವೆನು.
ನಾನು ಅವರಿಗೆ ಈಜಿಪ್ಟ್ ನದಿಯಿಂದ ಯೂಫ್ರೇಟೀಸ್
ಮಹಾನದಿಯವರೆಗೂ ಇರುವ ನಾಡನ್ನು ಕೊಡುವೆನು.
19ಇದು ಕೇನಿಯರ, ಕೆನಿಜೀಯರ, ಕದ್ಮೋನಿಯರ,
20ಹಿತ್ತೀಯರ, ಪೆರೆಜೀಯರ, ರೆಫಾಯರ,
21ಅಮೋರಿಯರ, ಕಾನಾನ್ಯರ, ಗಿರ್ಗಾಷಿಯರ ಮತ್ತು
ಯೆಬೂಸಿಯರ ನಾಡು'' ಎಂದು ಹೇಳಿದನು.

## ಸೇವಕಿಯಾಗಿದ್ದ ಹಾಗರಳು

16 ಸಾರಯಳು ಅಬ್ರಾಮನ ಹೆಂಡತಿ. ಆಕೆಗೆ ಮಕ್ಕಳಿ
ರಲಿಲ್ಲ. ಸಾರಯಳಿಗೆ ಈಜಿಪ್ಟಿನ ಒಬ್ಬ ಸೇವಕಿ
ಯಿದ್ದಳು. ಅವಳ ಹೆಸರು ಹಾಗರಳು. 2ಸಾರಯಳು
ಅಬ್ರಾಮನಿಗೆ, ''ಯೆಹೋವನು ನನಗೆ ಮಕ್ಕಳನ್ನು ಪಡೆ
ಯುವ ಅವಕಾಶವನ್ನು ಕೊಡಲಿಲ್ಲ. ಆದ್ದರಿಂದ ನನ್ನ
ಸೇವಕಿಯಾದ ಹಾಗರಳ ಬಳಿಗೆ ಹೋಗು. ಆಕೆಯಲ್ಲಿ
ಹುಟ್ಟುವ ಮಗುವನ್ನು ನನ್ನ ಮಗುವಂತೆ ಸ್ವೀಕರಿಸಿ
ಕೊಳ್ಳುವೆನು'' ಎಂದು ಹೇಳಿದಳು.
ಅಬ್ರಾಮನು ತನ್ನ ಹೆಂಡತಿಯಾದ ಸಾರಯಳಿಗೆ
ವಿಧೇಯನಾದನು. 3ಅಬ್ರಾಮನು ಕಾನಾನಿಗೆ ಬಂದು
ಹತ್ತು ವರ್ಷಗಳಾದ ಮೇಲೆ ಇದು ನಡೆಯಿತು. ಹೀಗೆ
ಸಾರಯಳು ತನ್ನ ಗಂಡನಾದ ಅಬ್ರಾಮನಿಗೆ ಹಾಗರಳನ್ನು
ಕೊಟ್ಟಳು. (ಹಾಗರಳು ಆಕೆಯ ಈಜಿಪ್ಟಿನ ಸೇವಕಿ
ಯಾಗಿದ್ದಳು.)
4ಹಾಗರಳು ಅಬ್ರಾಮನಿಂದ ಗರ್ಭಿಣಿಯಾದಾಗ ತನ್ನ
ಯಜಮಾನಿಯಾದ ಸಾರಯಳನ್ನೇ ಕಡೆಗಣಿಸ ತೊಡಗಿ
ದಳು. 5ಆಗ ಸಾರಯಳು ಅಬ್ರಾಮನಿಗೆ, ''ನನ್ನ ಸಂಕಟಕ್ಕೆ
ನೀನೇ ಕಾರಣ. ನಾನು ಅವಳನ್ನು ನಿನಗೆ ಕೊಟ್ಟೆನು. ಈಗ
ಅವಳು ಗರ್ಭಿಣಿಯಾಗಿದ್ದಾಳೆ ಮತ್ತು ನನ್ನನ್ನೇ ಕಡೆಗಣಿಸು
ತ್ತಿದ್ದಾಳೆ. ಯೆಹೋವನೇ ನನಗೂ ನಿನಗೂ ನ್ಯಾಯ
ತೀರಿಸಲಿ'' ಎಂದು ಹೇಳಿದಳು.
6ಅದಕ್ಕೆ ಅಬ್ರಾಮನು ಸಾರಯಳಿಗೆ, ''ನೀನು ಹಾಗರಳ
ಯಜಮಾನಿ. ನೀನು ಅವಳಿಗೆ ಏನು ಬೇಕಾದರೂ ಮಾಡ
ಬಹುದು'' ಎಂದು ಹೇಳಿದನು. ಆದ್ದರಿಂದ ಸಾರಯಳು
ಹಾಗರಳನ್ನು ಶಿಕ್ಷಿಸಿದಳು. ಆಗ ಹಾಗರಳು ಓಡಿ
ಹೋದಳು.

## ಹಾಗರಳ ಮಗನಾದ ಇಷ್ಮಾಯೇಲ

7ಯೆಹೋವನ ದೂತನು ಹಾಗರಳನ್ನು ಮರುಳು
ಗಾಡಿನ ಒರತೆಯೊಂದರ ಬಳಿಯಲ್ಲಿ ಕಂಡನು. ಆ ಒರ
ತೆಯು ಶೂರಿಗೆ ಹೋಗುವ ದಾರಿಯ ಬಳಿಯಲ್ಲಿತ್ತು.
8ದೇವದೂತನು ಅವಳಿಗೆ, ''ಹಾಗರಳೇ, ನೀನು ಸಾರ
ಯಳ ಸೇವಕಿಯಾಗಿದ್ದರೂ ಯಾಕೆ ಇಲ್ಲಿರುವೆ? ನೀನು
ಎಲ್ಲಿಗೆ ಹೋಗುತ್ತಿರುವೆ?'' ಎಂದು ಕೇಳಿದನು.
ಹಾಗರಳು, ''ನನ್ನ ಯಜಮಾನಿಯಾದ ಸಾರಯಳ ಬಳಿ
ಯಿಂದ ಓಡಿಹೋಗುತ್ತಿರುವೆ'' ಎಂದು ಹೇಳಿದಳು.
9ಯೆಹೋವನ ದೂತನು ಹಾಗರಳಿಗೆ, ''ಸಾರಯಳು
ನಿನ್ನ ಯಜಮಾನಿ. ನೀನು ಆಕೆಯ ಬಳಿಗೆ ಹಿಂತಿರುಗಿ
ಹೋಗಿ ಆಕೆಗೆ ವಿಧೇಯಳಾಗಿರು'' ಎಂದು ಹೇಳಿದನು.
10ಇದಲ್ಲದೆ ಯೆಹೋವನ ದೂತನು ಹಾಗರಳಿಗೆ,
''ನಾನು ನಿನ್ನ ಸಂತತಿಯವರನ್ನು ಅಸಂಖ್ಯಾತರನ್ನಾಗಿ
ಮಾಡುವೆನು'' ಅಂದನು.
11ಇದಲ್ಲದೆ ದೇವದೂತನು ಆಕೆಗೆ,

''ಹಾಗರಳೇ, ಈಗ ನೀನು ಗರ್ಭಿಣಿಯಾಗಿ ರುವೆ;
ನಿನಗೆ ಒಬ್ಬ ಮಗನು ಹುಟ್ಟುವನು. ನೀನು
ಅವನಿಗೆ ಇಷ್ಮಾಯೇಲ್ ಎಂದು ಹೆಸರಿಡಬೇಕು;
ಯಾಕಂದರೆ ಯೆಹೋವನು ನಿನ್ನ ಕಷ್ಟಗಳನ್ನು
ಕೇಳಿದ್ದಾನೆ; ಆತನು ನಿನಗೆ ಸಹಾಯ
ಮಾಡುವನು.
12 ''ಇಷ್ಮಾಯೇಲನು* ಕಾಡು ಕತ್ತೆಯಂತೆ ಗಡು
ಸಾಗಿದ್ದು ಸ್ವತಂತ್ರವಾಗಿರುವನು. ಅವನು ಪ್ರತಿ
ಯೊಬ್ಬರಿಗೂ ವಿರೋಧವಾಗಿರುವನು; ಪ್ರತಿ
ಯೊಬ್ಬರೂ ಅವನಿಗೆ ವಿರೋಧವಾಗಿರುವರು.
ಅವನು ಸ್ಥಳದಿಂದ ಸ್ಥಳಕ್ಕೆ ಹೋಗುತ್ತಾ ತನ್ನ
ಸಹೋದರರ ಸಮೀಪದಲ್ಲಿ ವಾಸಿಸಿದರೂ
ಅವರಿಗೆ ವಿರೋಧವಾಗಿರುವನು.''

13ಯೆಹೋವನು ತನ್ನೊಡನೆ ಮಾತಾಡಿದ್ದರಿಂದ ಹಾಗ
ರಳು, ''ಈ ಸ್ಥಳದಲ್ಲಿಯೂ ದೇವರು ನನ್ನನ್ನು ನೋಡಿ
ನನಗಾಗಿ ಚಿಂತಿಸುತ್ತಾನೆ ಎಂದುಕೊಂಡು ಆತನಿಗೆ
'ನನ್ನನ್ನು ನೋಡುವ ದೇವರು''' ಎಂದು ಹೆಸರಿಟ್ಟಳು.
14ಆದ್ದರಿಂದ ಆ ಬಾವಿಗೆ ಬೀರ್‌ಲಹೈರೋಯಿ* ಎಂದು
ಹೆಸರಾಯಿತು. ಈ ಬಾವಿಯು ಕಾದೇಶಿಗೂ ಬೆರೆದಿಗೂ
ನಡುವೆ ಇದೆ.

---

**ಇಷ್ಮಾಯೇಲ** ಈ ಹೆಸರಿನ ಅರ್ಥ: ''ದೇವರು ಕೇಳುತ್ತಾನೆ.''

**ಬೀರ್‌ಲಹೈರೋಯಿ** ಇದರರ್ಥ: ''ನನ್ನನ್ನು ನೋಡುವ ಜೀವಸ್ವರೂಪನ ಬಾವಿ.''

[15]ಹಾಗರಳು ಅಬ್ರಾಮನ ಮಗನಿಗೆ ಜನನ ಕೊಟ್ಟಳು.
ಅಬ್ರಾಮನು ಆ ಮಗನಿಗೆ ಇಷ್ಮಾಯೇಲ್ ಎಂದು ಹೆಸರಿ
ಟ್ಟನು. [16]ಅಬ್ರಾಮನಿಗೆ ಎಂಭತ್ತಾರು ವರ್ಷವಾಗಿದ್ದಾಗ
ಹಾಗರಳಲ್ಲಿ ಇಷ್ಮಾಯೇಲನು ಜನಿಸಿದನು.

### ಸುನ್ನತಿ – ಒಡಂಬಡಿಕೆ

17 ಅಬ್ರಾಮನಿಗೆ ತೊಂಭತ್ತೊಂಬತ್ತು ವರ್ಷವಾಗಿ
ದ್ದಾಗ ಯೆಹೋವನು ಅವನಿಗೆ ಪ್ರತ್ಯಕ್ಷನಾಗಿ,
''ನಾನು ಸರ್ವಶಕ್ತನಾದ ದೇವರು. ನನಗೆ ವಿಧೇಯ
ನಾಗಿದ್ದು ನಿರ್ದೋಷಿಯಾಗಿರು. [2]ನಾನು ನಿನ್ನೊಂದಿಗೆ
ಒಂದು ಒಡಂಬಡಿಕೆಯನ್ನು ಮಾಡಿಕೊಳ್ಳುವೆನು; ನಿನ್ನನ್ನು
ದೊಡ್ಡ ಜನಾಂಗವನ್ನಾಗಿ ಮಾಡುವುದಾಗಿ ವಾಗ್ದಾನ
ಮಾಡುತ್ತೇನೆ'' ಎಂದು ಹೇಳಿದನು.

[3]ಆ ಕೂಡಲೇ ಅಬ್ರಾಮನು ದೇವರಿಗೆ ಸಾಷ್ಟಾಂಗ ನಮ
ಸ್ಕಾರ ಮಾಡಿದನು. ಆಗ ದೇವರು ಅವನಿಗೆ, [4]''ನಾನು
ನಿನಗೆ ಮಾಡುವ ವಾಗ್ದಾನವೇನೆಂದರೆ: [5]'''ಅಬ್ರಾಮ'
ಎಂಬ ನಿನ್ನ ಹೆಸರನ್ನು ಬದಲಾಯಿಸಿ ನಿನಗೆ ಅಬ್ರಹಾಮ
ಎಂದು ಹೆಸರಿಡುವೆನು. ನಿನ್ನನ್ನು ಅಬ್ರಹಾಮ ಎಂದೇ ಕರೆ
ಯುವರು; ಯಾಕಂದರೆ ನೀನು ಅನೇಕ ಜನಾಂಗಗಳಿಗೆ
ಮೂಲಪಿತೃವಾಗುವೆ. [6]ಹೊಸ ಜನಾಂಗಗಳು ನಿನ್ನಿಂದ
ಹುಟ್ಟುವವು ; ರಾಜರುಗಳು ನಿನ್ನಿಂದ ಬರುವರು. [7]ನಾನು
ನಿನ್ನೊಂದಿಗೆ ಒಂದು ಒಡಂಬಡಿಕೆಯನ್ನು ಮಾಡಿಕೊಳ್ಳು
ವೆನು. ಈ ಒಡಂಬಡಿಕೆಯು ನಿನ್ನ ಎಲ್ಲಾ ಸಂತತಿಯವರಿಗೆ
ಶಾಶ್ವತವಾಗಿ ಅನ್ವಯಿಸುವುದು. ನಾನೇ ನಿನಗೂ ನಿನ್ನ
ಎಲ್ಲಾ ಸಂತತಿಯವರಿಗೂ ದೇವರಾಗಿರುವೆನು. [8]ನೀನು
ಪ್ರಯಾಣ ಮಾಡುತ್ತಿರುವ ಈ ಕಾನಾನ್ ದೇಶವನ್ನೆಲ್ಲ
ನಿನಗೂ ನಿನ್ನ ಎಲ್ಲಾ ಸಂತತಿಯವರಿಗೂ ಶಾಶ್ವತವಾಗಿ
ಕೊಡುವೆನು. ನಾನೇ ನಿಮ್ಮ ದೇವರಾಗಿರುವೆನು'' ಎಂದು
ಹೇಳಿದನು. [9]ಇದಲ್ಲದೆ ದೇವರು ಅಬ್ರಹಾಮನಿಗೆ,
''ನಮ್ಮ ಒಡಂಬಡಿಕೆಯ ಪ್ರಕಾರ ನೀನು ಮತ್ತು ನಿನ್ನ
ಸಂತತಿಯವರೆಲ್ಲರೂ ನನ್ನ ಒಡಂಬಡಿಕೆಗೆ ವಿಧೇಯರಾಗ
ಬೇಕು. [10]ನೀನೂ ಮತ್ತು ನಿನ್ನ ಎಲ್ಲಾ ಸಂತತಿಯವರು
ಕೈಕೊಳ್ಳಬೇಕಾದ ನಿಬಂಧನೆಯೇನಂದರೆ, ನಿಮ್ಮಲ್ಲಿ
ಹುಟ್ಟಿದ ಪ್ರತಿಯೊಂದು ಗಂಡುಮಗುವಿಗೂ ಸುನ್ನತಿ
ಮಾಡಿಸಬೇಕು. [11-12]ಇಂದಿನಿಂದ ನಿಮ್ಮಲ್ಲಿ ಗಂಡುಮಗು
ಹುಟ್ಟಿ ಎಂಟು ದಿನಗಳಾದ ಮೇಲೆ ಆ ಮಗುವಿಗೆ ಸುನ್ನತಿ
ಮಾಡಿಸಬೇಕು; ಈ ನಿಯಮವು ನಿಮ್ಮ ಮನೆಯಲ್ಲಿ
ಹುಟ್ಟಿದ ಸೇವಕರಿಗೂ, ಪರದೇಶದಿಂದ ಕೊಂಡುತಂದ
ಸೇವಕರಿಗೂ ಸಹ ಅನ್ವಯಿಸುತ್ತದೆ. ನನಗೂ ನಿನಗೂ ಆದ
ಒಡಂಬಡಿಕೆಗೆ ಇದು ಗುರುತಾಗಿರುವುದು. [13-14]ಹೀಗೆ
ಪ್ರತಿಯೊಬ್ಬನಿಗೂ ಸುನ್ನತಿಯಾಗಲೇಬೇಕು. ನಾನು
ನಿನ್ನೊಂದಿಗೆ ಮಾಡಿಕೊಂಡ ಒಡಂಬಡಿಕೆಯು ಶಾಶ್ವತ
ವಾದದ್ದು ಎಂಬುದಕ್ಕೆ ಈ ಸುನ್ನತಿಯೇ ದೈಹಿಕ ಗುರು
ತಾಗಿದೆ. ಸುನ್ನತಿ ಯಾಗಿಲ್ಲದ ಯಾವ ಪುರುಷನನ್ನೂ ನನ್ನ
ಜನರೆಂದು ಪರಿಗಣಿಸಲಾಗುವುದಿಲ್ಲ. ಆ ಪುರುಷನು ನನ್ನ
ಒಡಂಬಡಿಕೆಗೆ ವಿಧೇಯನಾಗದಿರುವುದೇ ಅದಕ್ಕೆ
ಕಾರಣ'' ಎಂದು ಹೇಳಿದನು.

### ಇಸಾಕನು ವಾಗ್ದಾನದ ಮಗನು

[15]ದೇವರು ಅಬ್ರಹಾಮನಿಗೆ, ''ನಿನ್ನ ಹೆಂಡತಿಯಾದ,
ಸಾರಯಳಿಗೆ* ನಾನು ಒಂದು ಹೆಸರನ್ನು ಕೊಡುತ್ತೇನೆ.
ಆಕೆಯ ಹೊಸ ಹೆಸರು ಸಾರಾ.* [16]ನಾನು ಆಕೆಯನ್ನು
ಆಶೀರ್ವದಿಸಿ ಆಕೆಗೆ ಒಬ್ಬ ಮಗನನ್ನು ದಯಪಾಲಿಸು
ವೆನು; ನೀನೇ ಅವನ ತಂದೆ. ಅನೇಕ ಜನಾಂಗಗಳಿಗೂ
ರಾಜರುಗಳಿಗೂ ಆಕೆಯು ಮೂಲಮಾತೆಯಾಗಿರುವಳು'
ಎಂದು ಹೇಳಿದನು.

[17]ಅಬ್ರಹಾಮನು ದೇವರಿಗೆ ಸಾಷ್ಟಾಂಗ ನಮಸ್ಕಾರ
ಮಾಡಿದನು. ಆದರೆ ಅವನು ಮನಸ್ಸಿನಲ್ಲಿ ನಗುತ್ತಾ
''ನನಗೆ ನೂರು ವರ್ಷ ವಯಸ್ಸಾಗಿರುವುದರಿಂದ ಮಗ
ನನ್ನು ಪಡೆಯಲು ನನಗೂ ಸಾಧ್ಯವಿಲ್ಲ. ಸಾರಾಳಿಗೆ
ತೊಂಭತ್ತು ವರ್ಷ ವಯಸ್ಸಾಗಿರುವುದರಿಂದ ಮಗನನ್ನು
ಪಡೆಯಲು ಆಕೆಗೂ ಸಾಧ್ಯವಿಲ್ಲ'' ಅಂದುಕೊಂಡನು.

[18]ಆಮೇಲೆ ಅಬ್ರಹಾಮನು ದೇವರಿಗೆ, ''ಇಷ್ಮಾಯೇ
ಲನೇ ನಿನ್ನ ಆಶೀರ್ವಾದವನ್ನು ಹೊಂದಿಕೊಂಡು ಜೀವಿಸ
ಬಾರದೇಕೆ?' ಎಂದು ಕೇಳಿದನು.

[19]ಆದಕ್ಕೆ ದೇವರು ಅವನಿಗೆ, ''ಇಲ್ಲ! ನಿನ್ನ ಹೆಂಡತಿ
ಯಾದ ಸಾರಾಳಿಗೆ ಒಬ್ಬ ಮಗನು ಹುಟ್ಟುವನು. ನೀನು
ಅವನಿಗೆ, ''ಇಸಾಕ''* ಎಂದು ಹೆಸರಿಡಬೇಕು. ನಾನು
ಒಂದು ಒಡಂಬಡಿಕೆಯನ್ನು ಅವನೊಡನೆ ಮಾಡಿಕೊಳ್ಳು
ವೆನು. ಆ ಒಡಂಬಡಿಕೆಯು ಅವನ ಎಲ್ಲಾ ಸಂತತಿಯ
ವರಲ್ಲಿಯೂ ಶಾಶ್ವತವಾಗಿರುವುದು.

[20]''ನೀನು ಇಷ್ಮಾಯೇಲನ ಬಗ್ಗೆ ಮಾಡಿದ ಭಿನ್ನಹವನ್ನು
ಕೇಳಿದ್ದೇನೆ. ನಾನು ಅವನನ್ನು ಆಶೀರ್ವದಿಸುವೆನು.
ಅವನು ಅನೇಕ ಮಕ್ಕಳನ್ನು ಪಡೆದುಕೊಳ್ಳುವನು. ಹನ್ನೆ
ರಡು ಮಹಾನಾಯಕರುಗಳಿಗೆ ಅವನು ತಂದೆಯಾಗು
ವನು. ಅವನ ಸಂತತಿಯು ಮಹಾಜನಾಂಗವಾಗುವುದು.
[21]ಆದರೆ ನಾನು ನನ್ನ ಒಡಂಬಡಿಕೆಯನ್ನು ಇಸಾಕನೊಡನೆ
ಮಾಡಿಕೊಳ್ಳುವೆನು. ಸಾರಾಳಲ್ಲಿ ಹುಟ್ಟುವ ಮಗನೇ
ಇಸಾಕನು. ಮುಂದಿನ ವರ್ಷ ಇದೇ ಸಮಯದಲ್ಲಿ
ಇಸಾಕನು ಹುಟ್ಟುವನು'' ಎಂದು ಹೇಳಿದನು.

---

**ಸಾರಯ** ಬಹುಶಃ ಅರಮೇಯಿಕ್ ಭಾಷೆಯಲ್ಲಿ ಇದರರ್ಥ ''ರಾಜ ಕುಮಾರಿ.''

**ಸಾರಾ** ಹೀಬ್ರೂ ಭಾಷೆಯಲ್ಲಿ ಇದರರ್ಥ ''ರಾಜಕುಮಾರಿ.''

**ಇಸಾಕ** ಇದರರ್ಥ ''ಅವನು ನಗುತ್ತಾನೆ.''

22ದೇವರು ಅಬ್ರಹಾಮನೊಡನೆ ಮಾತಾಡುವುದನ್ನು
ಮುಗಿಸಿದ ಮೇಲೆ ಮೇಲೋಕಕ್ಕೆ ಹೊರಟುಹೋದನು.
23ಅದೇ ದಿನದಲ್ಲಿ ಅಬ್ರಹಾಮನು ಇಷ್ಮಾಯೇಲನಿಗೂ
ತನ್ನ ಮನೆಯಲ್ಲಿದ್ದ ಸೇವಕರಿಗೆ ಹುಟ್ಟಿದ ಗಂಡು ಮಕ್ಕ
ಳಿಗೂ ಪರದೇಶಿಯರಿಂದ ಕೊಂಡುತಂದಿದ್ದ ಸೇವಕ
ರಿಗೂ ಯೆಹೋವನು ಹೇಳಿದಂತೆಯೇ ಸುನ್ನತಿ
ಮಾಡಿಸಿದನು.

24ಅಬ್ರಹಾಮನು ಸುನ್ನತಿ ಮಾಡಿಸಿಕೊಂಡಾಗ ತೊಂಭ
ತ್ತೊಂಭತ್ತು ವರ್ಷದವನಾಗಿದ್ದನು. 25ಇಷ್ಮಾಯೇಲನಿಗೆ
ಸುನ್ನತಿಯಾದಾಗ ಅವನಿಗೆ ಹದಿಮೂರು ವರ್ಷವಾಗಿತ್ತು.
26ಅಬ್ರಹಾಮನಿಗೂ ಅವನ ಮಗನಿಗೂ ಒಂದೇ ದಿನದಲ್ಲಿ
ಸುನ್ನತಿಯಾಯಿತು. 27ಅಬ್ರಹಾಮನ ಮನೆಯಲ್ಲಿದ್ದ
ಎಲ್ಲಾ ಗಂಡಸರಿಗೆ ಅಂದರೆ ಅವನ ಮನೆಯಲ್ಲಿ ಹುಟ್ಟಿದ
ಎಲ್ಲಾ ಸೇವಕರಿಗೆ ಮತ್ತು ಅವನು ಕ್ರಯಕ್ಕೆ ತೆಗೆದು
ಕೊಂಡಿದ್ದ ಎಲ್ಲಾ ಸೇವಕರಿಗೆ ಸುನ್ನತಿಯಾಯಿತು.

## ಮೂವರು ಸಂದರ್ಶಕರು

18 ಅಬ್ರಹಾಮನು ಮಮ್ರೆಯಲ್ಲಿದ್ದ ಓಕ್‌ಮರಗಳ
ತೋಪಿನ ಸಮೀಪದಲ್ಲಿ ವಾಸಿಸುತ್ತಿದ್ದಾಗ
ಯೆಹೋವನು ಅವನಿಗೆ ಕಾಣಿಸಿಕೊಂಡನು. ಒಮ್ಮೆ ಬಿಸಿ
ಲಿನ ತಾಪದಿಂದ ಅಬ್ರಹಾಮನು ತನ್ನ ಗುಡಾರದ ಬಾಗಿಲ
ಬಳಿ ಕುಳಿತಿದ್ದನು. 2ಅಬ್ರಹಾಮನು ದೃಷ್ಟಿಸಿ ನೋಡಿದಾಗ
ತನ್ನ ಮುಂದೆ ಮೂವರು ಪುರುಷರು ನಿಂತಿರುವುದನ್ನು
ಕಂಡನು. ಕೂಡಲೇ ಅವರ ಬಳಿಗೆ ಓಡಿಹೋಗಿ ಅವರಿಗೆ
ಸಾಷ್ಟಾಂಗ ನಮಸ್ಕಾರ ಮಾಡಿ ಅವರಿಗೆ, 3‘‘ಸ್ವಾಮಿಗಳೇ,
ನಿಮ್ಮ ಸೇವಕನಾದ ನನ್ನ ಜೊತೆಯಲ್ಲಿ ಸ್ವಲ್ಪ ಸಮಯವಿರಿ.
4ನಿಮ್ಮ ಕಾಲುಗಳನ್ನು ತೊಳೆದುಕೊಳ್ಳಲು ನೀರನ್ನು ತಂದು
ಕೊಡುವೆನು. ನೀವು ಮರದ ಕೆಳಗೆ ವಿಶ್ರಾಂತಿ ತೆಗೆದು
ಕೊಳ್ಳಿರಿ. 5ನಾನು ನಿಮಗೆ ಊಟವನ್ನು ತಂದುಕೊಡು
ವೆನು. ನೀವು ಬೇಕಾದಷ್ಟು ಊಟ ಮಾಡಿದ ನಂತರ ನಿಮ್ಮ
ಪ್ರಯಾಣವನ್ನು ಮುಂದುವರಿಸಬಹುದು’’ ಎಂದು ಹೇಳಿ
ದನು. ಆ ಮೂವರು ಪುರುಷರು, ‘‘ಸರಿ, ನೀನು
ಹೇಳಿದಂತೆಯೇ ಮಾಡು’’ ಅಂದರು.

6ಅಬ್ರಹಾಮನು ಗುಡಾರಕ್ಕೆ ಬೇಗನೆ ಹೋಗಿ ಸಾರ
ಳಿಗೆ, ‘‘ಮೂರು ದೊಡ್ಡ ರೊಟ್ಟಿಗಳಿಗೆ ಬೇಕಾಗುವಷ್ಟು
ಗೋಧಿಹಿಟ್ಟನ್ನು ಬೇಗನೆ ನಾದು’’ ಎಂದು ಹೇಳಿದನು.
7ಬಳಿಕ ಅವನು ತನ್ನ ಪಶುಗಳಿದ್ದಲ್ಲಿಗೆ ಓಡಿಹೋಗಿ
ಉತ್ತಮವಾದ ಎಳೆಕರುವನ್ನು ತೆಗೆದು ಸೇವಕನಿಗೆ ಕೊಟ್ಟು,
‘‘ಬೇಗನೇ ಕರುವನ್ನು ಕೊಯ್ದು, ಊಟಕ್ಕೆ ಸಿದ್ಧಮಾಡು’’
ಎಂದು ಹೇಳಿದನು. 8ಅಬ್ರಹಾಮನು ಆ ಮೂವರಿಗೆ
ಮಾಂಸದ ಅಡಿಗೆಯನ್ನು ಬಡಿಸಿದನು. ಇದಲ್ಲದೆ ಅವನು
ಹಾಲನ್ನೂ ಬೆಣ್ಣೆಯನ್ನೂ ಕೊಟ್ಟನು. ಆ ಮೂವರು ಊಟ
ಮಾಡುವಾಗ ಅಬ್ರಹಾಮನು ಅವರ ಸಮೀಪದಲ್ಲಿ
ಮರದ ಕೆಳಗೆ ನಿಂತುಕೊಂಡಿದ್ದನು.

9ಆ ಪುರುಷರು ಅಬ್ರಹಾಮನಿಗೆ, ‘‘ನಿನ್ನ ಹೆಂಡತಿ
ಯಾದ ಸಾರಳು ಎಲ್ಲಿ?’’ ಎಂದು ಕೇಳಿದರು.

ಅಬ್ರಹಾಮನು ಅವರಿಗೆ, ‘‘ಆಕೆ ಗುಡಾರದಲ್ಲಿ
ಇದ್ದಾಳೆ’’ ಅಂದನು.

10ಆಗ ಯೆಹೋವನು ಅವನಿಗೆ, ‘‘ನಾನು ಮತ್ತೆ ವಸಂತ
ಕಾಲದಲ್ಲಿ ಬರುತ್ತೇನೆ. ಆ ಸಮಯದಲ್ಲಿ ನಿನ್ನ ಹೆಂಡತಿ
ಯಾದ ಸಾರಳಿಗೆ ಒಬ್ಬ ಮಗನಿರುವನು’’ ಎಂದು
ಹೇಳಿದನು.

ಸಾರಳು ಗುಡಾರದಲ್ಲಿದ್ದುಕೊಂಡು ಇದನ್ನೆಲ್ಲಾ ಕೇಳಿಸಿ
ಕೊಳ್ಳುತ್ತಿದ್ದಳು. ಅವಳಿಗೆ ಈ ಸಂಗತಿಯೂ ಕೇಳಿಸಿತು.
11ಅಬ್ರಹಾಮನೂ ಮತ್ತು ಸಾರಳೂ ತುಂಬ ವೃದ್ಧರಾಗಿ
ದ್ದರು. ಸಾರಳಿಗೂ? ಮಕ್ಕಳು ಹುಟ್ಟುವ ಕಾಲ ಆಗಿ
ಹೋಗಿತ್ತು. 12ಆದ್ದರಿಂದ ಸಾರಳಿಗೆ ನಂಬಲಾಗಲಿಲ್ಲ. ಆಕೆ
ತನ್ನೊಳಗೆ, ‘‘ಈಗಾಗಲೇ ನನಗೆ ವಯಸ್ಸಾಗಿದೆ; ನನ್ನ
ಗಂಡನಿಗೂ ವಯಸ್ಸಾಗಿದೆ’’ ಅಂದುಕೊಂಡಳು.

13ಆಗ ಯೆಹೋವನು ಅಬ್ರಹಾಮನಿಗೆ, ‘‘ನಾನು
ಹೇಳುವುದನ್ನು ಸಾರಳು ನಂಬುತ್ತಿಲ್ಲ. ಆಕೆಯು ನಗುತ್ತಾ
ತನ್ನೊಳಗೆ, ‘ನನಗೆ ಮಕ್ಕಳಾಗದಷ್ಟು ವಯಸ್ಸಾಗಿದೆ’
ಅಂದುಕೊಂಡಳು. 14ಯೆಹೋವನಿಗೆ ಅಸಾಧ್ಯವಾದು
ದುಂಟೇ? ನಾನು ಮತ್ತೆ ವಸಂತಕಾಲದಲ್ಲಿ ಬರುವೆನು.
ಆಗ ನಿನ್ನ ಹೆಂಡತಿಯಾದ ಸಾರಳಿಗೆ ಒಬ್ಬ ಮಗನಿದ್ದೇ
ಇರುವನು’’ ಅಂದನು.

15ಆದರೆ ಸಾರಳು, ‘‘ನಾನು ನಗಲಿಲ್ಲ’’ ಅಂದಳು.

ಅದಕ್ಕೆ ಯೆಹೋವನು, ‘‘ಇಲ್ಲ, ನೀನು ನಕ್ಕಿದ್ದು ನಿಜ!’’
ಅಂದನು. 16ಆಮೇಲೆ ಆ ಪುರುಷರು ಹೋಗಲು ಎದ್ದು
ನಿಂತರು. ಅವರು ಸೊದೋಮಿನ ಕಡೆಗೆ ಕಣ್ಣೆತ್ತಿ ನೋಡಿ
ಆ ಕಡೆಗೆ ನಡೆಯಲಾರಂಭಿಸಿದರು. ಅವರನ್ನು ಕಳುಹಿಸಿ
ಕೊಡಲು ಅಬ್ರಹಾಮನು ಅವರ ಸಂಗಡ ಸ್ವಲ್ಪದೂರ
ಹೋದನು.

## ಅಬ್ರಹಾಮನು ದೇವರಿಗೆ ಮಾಡಿದ ಭಿನ್ನಹ

17ಯೆಹೋವನು ತನ್ನೊಳಗೆ ಹೀಗೆಂದುಕೊಂಡನು:
‘‘ನಾನು ಈಗ ಮಾಡುವ ಕಾರ್ಯವನ್ನು ಅಬ್ರಹಾಮನಿಗೆ
ತಿಳಿಸಲೇ? 18ಅಬ್ರಹಾಮನಿಂದ ಬಲಿಷ್ಠವಾದ ಮಹಾ
ಜನಾಂಗ ಹುಟ್ಟುವುದು; ಅವನ ಮೂಲಕ ಈ ಲೋಕದ
ಜನರೆಲ್ಲರೂ ಆಶೀರ್ವಾದ ಹೊಂದುವರು. 19ನಾನು ಅವ
ನೊಡನೆ ವಿಶೇಷವಾದ ಒಡಂಬಡಿಕೆಯನ್ನು ಮಾಡಿ
ಕೊಂಡಿದ್ದೇನೆ. ಅವನು ತನ್ನ ಮಕ್ಕಳಿಗೂ ಸಂತತಿಯ
ವರಿಗೂ ನನಗೆ ವಿಧೇಯರಾಗುವಂತೆ ಮತ್ತು ನ್ಯಾಯ
ನೀತಿಗಳಿಂದ ಜೀವಿಸುವಂತೆ ಆಜ್ಞಾಪಿಸಲೆಂದು ನಾನು

ಅವನೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡೆನು. ಅವರು ಹೀಗೆ ಜೀವಿಸಿದರೆ, ನನ್ನ ವಾಗ್ದಾನಗಳನ್ನೆಲ್ಲಾ ನೆರವೇರಿಸುವೆನು.''

20 ಇದಲ್ಲದೆ ಯೆಹೋವನು, ''ಸೊದೋಮ್ ಮತ್ತು ಗೊಮೋರಗಳ ಜನರು ಎಷ್ಟೋ ಕೆಟ್ಟವರೆಂದು ಅನೇಕ ಸಲ ಕೇಳಿದ್ದೇನೆ. 21 ಆದ್ದರಿಂದ ನಾನು ಕೆಳಗಿಳಿದು ಅಲ್ಲಿಗೆ ಹೋಗಿ ನಾನು ಕೇಳಿದ್ದು ನಿಜವೇ ಎಂದು ಪರೀಕ್ಷಿಸುವೆನು'' ಎಂದುಕೊಂಡನು.

22 ಆದ್ದರಿಂದ ಆ ಪುರುಷರು ಸೊದೋಮಿನ ಕಡೆಗೆ ನಡೆಯತೊಡಗಿದರು. ಆದರೆ ಅಬ್ರಹಾಮನು ಯೆಹೋವನ ಎದುರಿನಲ್ಲಿ ನಿಂತುಕೊಂಡಿದ್ದನು. 23 ಅಬ್ರಹಾಮನು ಯೆಹೋವನ ಸಮೀಪಕ್ಕೆ ಬಂದು, ''ಯೆಹೋವನೇ, ನೀನು ಕೆಟ್ಟವರನ್ನು ನಾಶಮಾಡುವಾಗ ನೀತಿವಂತರನ್ನು ಸಹ ನಾಶಮಾಡಬೇಕೆಂದಿರುವೆಯೋ? 24 ಒಂದುವೇಳೆ ಆ ಪಟ್ಟಣದಲ್ಲಿ ಐವತ್ತು ಮಂದಿ ನೀತಿವಂತರಿದ್ದರೆ ಏನು ಮಾಡುವೆ? ನೀನು ಆ ಪಟ್ಟಣವನ್ನು ನಾಶಮಾಡುವಿಯೋ? ಖಂಡಿತವಾಗಿಯೂ ಇಲ್ಲ! ಅಲ್ಲಿ ಜೀವಿಸುತ್ತಿರುವ ಐವತ್ತು ಮಂದಿ ನೀತಿವಂತರಿಗಾಗಿ ನೀನು ಆ ಪಟ್ಟಣವನ್ನು ಉಳಿಸಿ ಕಾಪಾಡುವೆ. 25 ಖಂಡಿತವಾಗಿಯೂ ನೀನು ಆ ಪಟ್ಟಣವನ್ನು ನಾಶಮಾಡುವುದಿಲ್ಲ. ಕೆಟ್ಟವರನ್ನು ಕೊಲ್ಲುವುದಕ್ಕಾಗಿ ನೀನು ಐವತ್ತು ಮಂದಿ ನೀತಿವಂತರನ್ನು ಕೊಲ್ಲುವುದಿಲ್ಲ. ಒಂದುವೇಳೆ ನೀನು ಕೊಂದರೆ, ಒಳ್ಳೆಯವರೂ ಕೆಟ್ಟವರೂ ಸರಿಸಮಾನರಾಗುವರು. ಅವರಿಬ್ಬರೂ ದಂಡನೆಗೆ ಗುರಿಯಾಗುವರು. ನೀನು ಲೋಕದವರಿಗೆಲ್ಲ ನ್ಯಾಯಾಧಿಪತಿ. ನೀನು ನ್ಯಾಯವಾದದ್ದನ್ನೇ ಮಾಡುವೆ ಎಂದು ನನಗೆ ಗೊತ್ತಿದೆ'' ಎಂದು ಹೇಳಿದನು.

26 ಆಮೇಲೆ ಯೆಹೋವನು, ''ನಾನು ಸೊದೋಮಿನಲ್ಲಿ ಐವತ್ತು ಮಂದಿ ನೀತಿವಂತರನ್ನು ಕಂಡರೆ, ನಾನು ಇಡೀ ಪಟ್ಟಣವನ್ನೇ ಉಳಿಸಿ ಕಾಪಾಡುವೆನು'' ಎಂದನು.

27 ಆಗ ಅಬ್ರಹಾಮನು ಯೆಹೋವನಿಗೆ, ''ನಿನಗೆ ನನ್ನನ್ನು ಹೋಲಿಸಿಕೊಂಡರೆ, ನಾನು ಕೇವಲ ಧೂಳು ಮತ್ತು ಬೂದಿ. ಆದರೆ ಈ ಪ್ರಶ್ನೆಯನ್ನೂ ಕೇಳಲು ನನಗೆ ಅವಕಾಶಕೊಡು. 28 ಒಂದುವೇಳೆ ಐದು ಮಂದಿ ಕಡಿಮೆಯಾಗಿದ್ದು ನಲವತ್ತೈದು ಮಂದಿ ಮಾತ್ರ ನೀತಿವಂತರಿದ್ದರೆ ಆ ಪಟ್ಟಣವನ್ನು ನಾಶಮಾಡುವಿಯಾ?'' ಎಂದು ಕೇಳಿದನು.

ಅದಕ್ಕೆ ಯೆಹೋವನು ಅವನಿಗೆ, ''ನಾನು ನಲವತ್ತೈದು ಮಂದಿ ನೀತಿವಂತರನ್ನು ಕಂಡರೂ ಆ ಪಟ್ಟಣವನ್ನು ನಾಶಮಾಡುವುದಿಲ್ಲ'' ಎಂದು ಹೇಳಿದನು.

29 ಮತ್ತೆ ಅಬ್ರಹಾಮನು ದೇವರಿಗೆ, ''ಕೇವಲ ನಲವತ್ತು ಮಂದಿ ನೀತಿವಂತರನ್ನು ಕಂಡರೆ, ನೀನು ಆ ಪಟ್ಟಣವನ್ನು ನಾಶಮಾಡುವೆಯಾ?'' ಎಂದು ಕೇಳಿದನು.

ಯೆಹೋವನು ಅವನಿಗೆ, ''ನಲವತ್ತು ಮಂದಿ ನೀತಿವಂತರನ್ನು ಕಂಡರೂ ನಾನು ಆ ಪಟ್ಟಣವನ್ನು ನಾಶಮಾಡುವುದಿಲ್ಲ'' ಎಂದು ಹೇಳಿದನು. 30 ಆಮೇಲೆ ಅಬ್ರಹಾಮನು, ''ಯೆಹೋವನೇ, ನನ್ನ ಮೇಲೆ ಸಿಟ್ಟುಮಾಡಬೇಡ. ಈ ಪ್ರಶ್ನೆಯನ್ನೂ ಕೇಳುವೆ: ಆ ಪಟ್ಟಣದಲ್ಲಿ ಕೇವಲ ಮೂವತ್ತು ಮಂದಿ ನೀತಿವಂತರಿದ್ದರೆ ನೀನು ಆ ಪಟ್ಟಣವನ್ನು ನಾಶಮಾಡುವೆಯಾ?'' ಎಂದು ಕೇಳಿದನು.

ಯೆಹೋವನು ಅವನಿಗೆ, ''ಅಲ್ಲಿ ಮೂವತ್ತು ಮಂದಿ ನೀತಿವಂತರಿದ್ದರೂ ನಾನು ಆ ಪಟ್ಟಣವನ್ನು ನಾಶಮಾಡುವುದಿಲ್ಲ'' ಅಂದನು.

31 ಆಮೇಲೆ ಅಬ್ರಹಾಮನು, ''ನನ್ನ ಯೆಹೋವನು ಏನೂ ತಿಳಿದುಕೊಳ್ಳದಿರಲಿ. ನಾನು ಮತ್ತೊಂದು ಪ್ರಶ್ನೆ ಕೇಳುವೆ. ಅಲ್ಲಿ ಇಪ್ಪತ್ತು ಮಂದಿ ನೀತಿವಂತರಿದ್ದರೆ ಏನು ಮಾಡುವೆ?'' ಎಂದು ಕೇಳಿದನು. ಯೆಹೋವನು ಅವನಿಗೆ, ''ಅಲ್ಲಿ ಇಪ್ಪತ್ತು ಮಂದಿ ನೀತಿವಂತರನ್ನು ಕಂಡರೆ ಆ ಪಟ್ಟಣವನ್ನು ನಾಶ ಮಾಡುವುದಿಲ್ಲ'' ಎಂದು ಹೇಳಿದನು.

32 ಆಮೇಲೆ ಅಬ್ರಹಾಮನು, ''ಯೆಹೋವನೇ, ದಯಮಾಡಿ ನನ್ನ ಮೇಲೆ ಸಿಟ್ಟುಗೊಳ್ಳಬೇಡ. ಇದೊಂದು ಸಲ ಮಾತ್ರ ಪ್ರಶ್ನೆ ಕೇಳುವೆ. ಹತ್ತು ಮಂದಿ ನೀತಿವಂತರನ್ನು ಕಂಡರೆ ಏನು ಮಾಡುವೆ?'' ಎಂದು ಕೇಳಿದನು.

ಯೆಹೋವನು ಅವನಿಗೆ, ''ನಾನು ಆ ಪಟ್ಟಣದಲ್ಲಿ ಹತ್ತು ಮಂದಿ ನೀತಿವಂತರನ್ನು ಕಂಡರೂ, ಅದನ್ನು ನಾಶಮಾಡುವುದಿಲ್ಲ'' ಅಂದನು.

33 ಯೆಹೋವನು ಅಬ್ರಹಾಮನೊಂದಿಗೆ ಮಾತಾಡುವುದನ್ನು ಮುಗಿಸಿದ ಮೇಲೆ ಅಲ್ಲಿಂದ ಹೊರಟುಹೋದನು. ಅಬ್ರಹಾಮನು ಸಹ ತನ್ನ ಮನೆಗೆ ಹಿಂತಿರುಗಿದನು.

## ಲೋಟನ ಸಂದರ್ಶಕರು

19 ಆ ಸಾಯಂಕಾಲ, ದೇವದೂತರಿಬ್ಬರು ಸೊದೋಮ್ ನಗರಕ್ಕೆ ಬಂದರು. ನಗರದ ಬಾಗಿಲುಗಳ ಬಳಿ ಕುಳಿತುಕೊಂಡಿದ್ದ ಲೋಟನು ದೇವದೂತರನ್ನು ಕಂಡು, ಅವರ ಬಳಿಗೆ ಹೋಗಿ ನಮಸ್ಕರಿಸಿದನು. 2 ಲೋಟನು ಅವರಿಗೆ, ''ಸ್ವಾಮಿಗಳೇ, ದಯವಿಟ್ಟು ನನ್ನ ಮನೆಗೆ ಬನ್ನಿ. ನಾನು ನಿಮ್ಮನ್ನು ಉಪಚರಿಸುವೆನು. ನಿಮ್ಮ ಕೈಕಾಲುಗಳನ್ನು ತೊಳೆದುಕೊಂಡು ಈ ರಾತ್ರಿ ನಮ್ಮ ಮನೆಯಲ್ಲೇ ಇರಿ. ನಾಳೆ ಮುಂಜಾನೆ ನಿಮ್ಮ ಪ್ರಯಾಣವನ್ನು ಮುಂದುವರಿಸಬಹುದು'' ಎಂದು ಹೇಳಿದನು. ದೇವದೂತರು, ''ಈ ಚೌಕದಲ್ಲಿ* ನಾವು ಈ ರಾತ್ರಿ ಕಳೆಯುತ್ತೇವೆ'' ಎಂದು ಉತ್ತರಿಸಿದರು.

---

**ಚೌಕ** ನಗರದ ಬಯಲು ಪ್ರದೇಶ. ಇದು ನಗರದ್ವಾರಗಳ ಸಮೀಪದಲ್ಲಿತ್ತು. ಪ್ರಯಾಣಿಕರು ನಗರಕ್ಕೆ ಬಂದಾಗ ಈ ಸ್ಥಳದಲ್ಲಿ ಇಳಿದುಕೊಳ್ಳುತ್ತಿದ್ದರು.

3ಆದರೆ ಲೋಟನು ತನ್ನ ಮನೆಗೆ ಬರುವಂತೆ ಒತ್ತಾಯಿ
ಸಿದ್ದರಿಂದ ಅವರು ಅವನ ಮನೆಗೆ ಹೋದರು. ಲೋಟನು
ಅವರಿಗಾಗಿ ಅಡಿಗೆ ಮಾಡಿಸಿದನು; ರೊಟ್ಟಿಗಳನ್ನು ಸುಡಿ
ಸಿದನು. ದೇವದೂತರು ಊಟ ಮಾಡಿದರು.
4ಆ ರಾತ್ರಿ ಮಲಗುವುದಕ್ಕಿಂತ ಮೊದಲು
ಸೊದೋಮಿನ ಗಂಡಸರೆಲ್ಲರೂ ಬಂದು ಲೋಟನ
ಮನೆಯ ಸುತ್ತಲೂ ನಿಂತುಕೊಂಡು ಲೋಟನಿಗೆ, 5“ನಿನ್ನ
ಮನೆಗೆ ಬಂದ ಆ ಇಬ್ಬರು ಪುರುಷರು (ದೂತರು)
ಎಲ್ಲಿದ್ದಾರೆ? ಅವರನ್ನು ಹೊರಗೆ ಕಳುಹಿಸು. ನಾವು ಅವ
ರನ್ನು ಸಂಭೋಗಿಸಬೇಕು” ಎಂದು ಕೂಗಿಹೇಳಿದರು.
6ಲೋಟನು ಹೊರಗೆ ಬಂದು ಬಾಗಿಲಿಗೆ ಬೀಗ ಹಾಕಿ,
7ಆ ಗಂಡಸರಿಗೆ, “ನನ್ನ ಸಹೋದರರೇ, ನಾನು ನಿಮ್ಮನ್ನು
ಬೇಡಿಕೊಳ್ಳುತ್ತಿದ್ದೇನೆ. ದಯವಿಟ್ಟು ಈ ಕೆಟ್ಟಕಾರ್ಯ
ವನ್ನು ಮಾಡಬೇಡಿ. 8ನೋಡಿ! ನನಗೆ ಇಬ್ಬರು ಹೆಣ್ಣು
ಮಕ್ಕಳಿದ್ದಾರೆ. ಅವರು ಹಿಂದೆಂದೂ ಗಂಡಸರೊಡನೆ
ಮಲಗಿದವರಲ್ಲ. ನೀವು ಅವರಿಗೆ ಏನುಬೇಕಾದರೂ
ಮಾಡಿ ,ಆದರೆ ದಯವಿಟ್ಟು ಈ ಪುರುಷರಿಗೆ ಏನನ್ನೂ
ಮಾಡಬೇಡಿ. ಇವರು ನನ್ನ ಮನೆಗೆ ಬಂದಿದ್ದಾರೆ; ಇವ
ರನ್ನು ಕಾಪಾಡುವುದು ನನ್ನ ಕರ್ತವ್ಯ” ಎಂದು ಹೇಳಿದನು.
9ಮನೆಯ ಸುತ್ತಲೂ ನಿಂತುಕೊಂಡಿದ್ದ ಗಂಡಸರು
ಅವನಿಗೆ, “ದಾರಿ ಬಿಡು” ಎಂದು ಕೂಗಿದರು. ಆಮೇಲೆ
ಅವರು ತಮ್ಮೊಳಗೆ, “ಈ ಲೋಟನು ನಮ್ಮ ನಗರಕ್ಕೆ
ಪ್ರವಾಸಿಗನಂತೆ ಬಂದು ಈಗ ನಮಗೇ ನ್ಯಾಯವನ್ನು
ಹೇಳಿಕೊಡುತ್ತಿದ್ದಾನೆ” ಎಂದು ಮಾತಾಡಿಕೊಂಡರು.
ಆಮೇಲೆ ಅವರು ಲೋಟನಿಗೆ, “ನಾವು ಆ ಪುರುಷರಿಗೆ
ಮಾಡುವದಕ್ಕಿಂತ ನಿನಗೇ ಹೆಚ್ಚು ಕೆಟ್ಟದ್ದನ್ನು ಮಾಡು
ತ್ತೇವೆ” ಎಂದು ಕೂಗಿ ಹೇಳಿ ಲೋಟನ ಸಮೀಪಕ್ಕೆ ಬಂದು
ಬಾಗಿಲನ್ನು ಮುರಿದು ಹಾಕಲು ಸಿದ್ಧರಾದರು.
10ಆದರೆ ಮನೆಯೊಳಗಿದ್ದ ಇಬ್ಬರು ಪುರುಷರು ಬಾಗಿ
ಲನ್ನು ತೆರೆದು ಲೋಟನನ್ನು ಮನೆಯೊಳಗೆ ಎಳೆದು
ಕೊಂಡು ಬಾಗಿಲನ್ನು ಮುಚ್ಚಿದರು. 11ಆ ಇಬ್ಬರು ಪುರು
ಷರು ಮನೆಯ ಹೊರಗೆ ಇದ್ದ ಗಂಡಸರನ್ನೆಲ್ಲಾ ಕುರುಡ
ರಾಗುವಂತೆ ಮಾಡಿದ್ದರಿಂದ ಅವರು ಬಾಗಿಲನ್ನು ಗುರುತಿ
ಸಲಾರದೆ ಹೋದರು.

### ಸೊದೋಮಿನಿಂದ ಪಲಾಯನ

12ಆ ಇಬ್ಬರು ಪುರುಷರು ಲೋಟನಿಗೆ, “ನಿನ್ನ
ಕುಟುಂಬದ ಬೇರೆ ಯಾರಾದರೂ ಈ ನಗರದಲ್ಲಿ ಇದ್ದಾ
ರೆಯೇ? ನಿನಗೆ ಅಳಿಯಂದಿರಾಗಲೀ ಗಂಡು ಮಕ್ಕಳಾ
ಗಲೀ ಹೆಣ್ಣುಮಕ್ಕಳಾಗಲೀ ಇಲ್ಲಿ ವಾಸವಾಗಿದ್ದಾರೆಯೇ?
ನಿನ್ನ ಕುಟುಂಬದ ಯಾರಾದರೂ ಈ ನಗರದಲ್ಲಿದ್ದರೆ
ಈಗಲೇ ಇಲ್ಲಿಂದ ಹೊರಡುವಂತೆ ಅವರಿಗೆ ತಿಳಿಸು.
13ನಾವು ಈ ನಗರವನ್ನು ನಾಶಮಾಡುತ್ತೇವೆ. ಈ ನಗರದ
ದುಷ್ಟತನವನ್ನು ಯೆಹೋವನು ನೋಡಿದ್ದಾನೆ. ಆದ್ದ
ರಿಂದ ಇದನ್ನು ನಾಶಮಾಡಲು ಆತನೇ ನಮ್ಮನ್ನು ಕಳುಹಿ
ಸಿದ್ದಾನೆ” ಎಂದು ಹೇಳಿದರು.
14ಆದ್ದರಿಂದ ಲೋಟನು ಹೊರಗೆ ಹೋಗಿ, ತನ್ನ ಹೆಣ್ಣು
ಮಕ್ಕಳೊಡನೆ ನಿಶ್ಚಿತಾರ್ಥವಾಗಿದ್ದ ಅಳಿಯಂದಿರೊಡನೆ
ಮಾತಾಡಿ, “ಬೇಗನೆ ಈ ಪಟ್ಟಣವನ್ನು ಬಿಟ್ಟು ಹೊರಡಿರಿ;
ಯೆಹೋವನು ಈ ಪಟ್ಟಣವನ್ನು ನಾಶಮಾಡುವನು”
ಎಂದು ಹೇಳಿದನು. ಲೋಟನ ಈ ಮಾತು ಅವರಿಗೆ
ತಮಾಷೆಯಂತೆ ಕಂಡಿತು.
15ಸೂರ್ಯೋದಯಕ್ಕಿಂತ ಮೊದಲೇ ಹೊರಡುವಂತೆ
ದೇವದೂತರು ಲೋಟನನ್ನು ಒತ್ತಾಯಿಸಿ, “ಈ ನಗರ
ವನ್ನು ನಾಶಗೊಳಿಸಲಾಗುವುದು. ಆದ್ದರಿಂದ ನಿನ್ನ ಹೆಂಡ
ತಿಯನ್ನೂ ನಿನ್ನ ಇಬ್ಬರು ಹೆಣ್ಣುಮಕ್ಕಳನ್ನೂ ಕರೆದು
ಕೊಂಡು ಈ ಸ್ಥಳದಿಂದ ಓಡಿಹೋಗು, ಆಗ ನೀನು ಈ
ನಗರದೊಡನೆ ನಾಶವಾಗುವುದಿಲ್ಲ” ಎಂದು ಹೇಳಿದರು.
16ಆದರೆ ಲೋಟನು ಗಲಿಬಿಲಿಗೊಂಡು ತಡಮಾಡಲು
ಆ ಇಬ್ಬರು ಪುರುಷರು (ದೂತರು) ಲೋಟನನ್ನೂ
ಅವನ ಹೆಂಡತಿಯನ್ನೂ ಅವನ ಇಬ್ಬರು ಹೆಣ್ಣು ಮಕ್ಕ
ಳನ್ನೂ ಕೈಹಿಡಿದುಕೊಂಡು ನಗರದ ಹೊರಕ್ಕೆ ಸುರಕ್ಷಿತ
ವಾಗಿ ತಂದುಬಿಟ್ಟರು. ಹೀಗೆ ಯೆಹೋವನು ಲೋಟ
ನಿಗೂ ಅವನ ಕುಟುಂಬದವರಿಗೂ ದಯೆತೋರಿದನು.
17ಅವರು ನಗರದ ಹೊರಕ್ಕೆ ಬಂದ ಮೇಲೆ ಆ ಪುರುಷರಲ್ಲಿ
ಒಬ್ಬನು, “ಈಗ ಓಡಿಹೋಗಿ ನಿಮ್ಮ ಪ್ರಾಣವನ್ನು ಕಾಪಾಡಿ
ಕೊಳ್ಳಿ; ನಗರದ ಕಡೆಗೆ ತಿರುಗಿ ನೋಡಬೇಡಿ; ಕಣಿವೆಯ
ಯಾವ ಸ್ಥಳದಲ್ಲೂ ನಿಂತುಕೊಳ್ಳಬೇಡಿ; ತಪ್ಪಿಸಿಕೊಂಡು
ಬೆಟ್ಟಗಳಿಗೆ ಓಡಿಹೋಗಿರಿ; ಇಲ್ಲವಾದರೆ, ಈ ನಗರ
ದೊಡನೆ ನೀವೂ ನಾಶವಾಗುವಿರಿ” ಎಂದು ಹೇಳಿದನು.
18ಆದರೆ ಲೋಟನು ಆ ಪುರುಷರಿಗೆ, “ಸ್ವಾಮಿಗಳೇ,
ದಯವಿಟ್ಟು ಬಹುದೂರದವರೆಗೆ ಓಡಿಹೋಗುವಂತೆ
ನಮ್ಮನ್ನು ಒತ್ತಾಯಿಸಬೇಡಿ. 19ನಿಮ್ಮ ಸೇವಕನಾದ ನನಗೆ
ಮಹಾ ಕರುಣೆಯನ್ನು ತೋರಿ ನನ್ನನ್ನು ಕಾಪಾಡಿದ್ದೀರಿ.
ಆದರೆ ನಾನು ಬೆಟ್ಟಗಳವರೆಗೂ ಓಡಿಹೋಗಲಾರೆ.
ನಾನು ನಿಧಾನವಾಗಿ ಹೋಗುವುದಾದರೆ ಕೇಡು ಸಂಭವಿಸಿ
ಕೊಲ್ಲಲ್ಪಡುವೆನು. 20ಅಗೋ, ಅಲ್ಲಿ ಒಂದು ಚಿಕ್ಕ
ಊರಿದೆ. ಆ ಊರಿಗೆ ಓಡಿಹೋಗಲು ನನಗೆ ಅಪ್ಪಣೆ
ಕೊಡಿ. ನಾನು ಅಲ್ಲಿಗೆ ಓಡಿಹೋಗಿ ಸುರಕ್ಷಿತವಾಗಿರು
ವೆನು” ಎಂದು ಹೇಳಿದನು.
21ದೂತರು ಲೋಟನಿಗೆ, “ಆಗಲಿ, ನಿನಗೆ ಅಪ್ಪಣೆ
ಕೊಟ್ಟಿದ್ದೇನೆ. ನಾನು ಆ ಊರನ್ನು ನಾಶಮಾಡುವುದಿಲ್ಲ.
22ಆದರೆ ಅಲ್ಲಿಗೆ ಬೇಗನೆ ಓಡಿಹೋಗು, ನೀನು ಆ ಊರಿಗೆ
ಸುರಕ್ಷಿತವಾಗಿ ಸೇರುವತನಕ ನಾನು ಸೊದೋಮನ್ನು

ನಾಶಗೊಳಿಸಲಾಗುವುದಿಲ್ಲ'' ಎಂದು ಹೇಳಿದನು. (ಆ
ಊರಿಗೆ ಚೋಗರ್ ಎಂದು ಕರೆಯಲಾಯಿತು;
ಯಾಕಂದರೆ ಅದು ಚಿಕ್ಕ ಊರು.)

## ಸೊದೋಮ್ ಮತ್ತು ಗೊಮೋರ್ ಪಟ್ಟಣಗಳ ನಾಶನ

23ಸೂರ್ಯೋದಯವಾಗುವಷ್ಟರಲ್ಲಿ ಲೋಟನು
ಚೋಗರಿಗೆ ಪ್ರವೇಶಿಸುತ್ತಿದ್ದನು. 24ಆಗ ಯೆಹೋವನು
ಸೊದೋಮ್ ಮತ್ತು ಗೊಮೋರ್ ಪಟ್ಟಣಗಳ ಮೇಲೆ
ಆಕಾಶದಿಂದ ಉರಿಯುವ ಗಂಧಕದ ಮಳೆಯನ್ನು ಸುರಿಸಿ
ದನು. 25ಹೀಗೆ ಯೆಹೋವನು ಆ ಎರಡು ನಗರಗಳನ್ನು
ನಾಶಮಾಡಿದನು; ಇಡೀ ಕಣಿವೆಯನ್ನೂ, ಅದರಲ್ಲಿ ಬೆಳೆ
ಯುತ್ತಿದ್ದ ಸಸ್ಯಗಳನ್ನೂ ನಗರಗಳಲ್ಲಿದ್ದ ಎಲ್ಲಾ ಜನರನ್ನೂ
ನಾಶಮಾಡಿದನು.
26ಅವರು ಓಡಿಹೋಗುತ್ತಿರುವಾಗ ಲೋಟನ ಹೆಂಡತಿ
ನಗರದ ಕಡೆಗೆ ಹಿಂತಿರುಗಿ ನೋಡಿದಳು. ಆ ಕೂಡಲೇ
ಆಕೆಯು ಉಪ್ಪಿನ ಕಂಬವಾದಳು.
27ಅಂದು ಮುಂಜಾನೆ ಅಬ್ರಹಾಮನು ಎದ್ದು ತಾನು
ಯೆಹೋವನ ಮುಂದೆ ನಿಂತುಕೊಂಡಿದ್ದ ಸ್ಥಳಕ್ಕೆ
ಹೋದನು. 28ಅಬ್ರಹಾಮನು ಸೊದೋಮ್ ಮತ್ತು
ಗೊಮೋರ್ ಪಟ್ಟಣಗಳ ಕಡೆಗೂ ಕಣಿವೆ ಪ್ರದೇಶದ
ಕಡೆಗೂ ನೋಡಿದಾಗ ಆ ಪ್ರದೇಶದಿಂದ ಹೊಗೆ ಮೇಲೇ
ರುತ್ತಿರುವುದನ್ನು ಕಂಡನು; ಧಗಧಗಿಸುವ ಬೆಂಕಿಯಿಂದ
ಬರುವ ಹೊಗೆಯಂತೆ ಅದು ಕಂಡಿತು. 29ದೇವರು ಆ
ಸೀಮೆಯ ನಗರಗಳನ್ನು ನಾಶಮಾಡಿದರೂ ಅಬ್ರಹಾಮ
ನನ್ನು ಜ್ಞಾಪಿಸಿಕೊಂಡು ಲೋಟನ ಪ್ರಾಣವನ್ನು ಉಳಿಸಿ
ದನು; ಆದರೆ ಲೋಟನು ವಾಸಿಸುತ್ತಿದ್ದ ನಗರವನ್ನು ನಾಶ
ಮಾಡಿದನು.

## ಲೋಟ ಮತ್ತು ಅವನ ಹೆಣ್ಣು ಮಕ್ಕಳು

30ಚೋಗರ್ ಊರಿನಲ್ಲಿ ವಾಸಮಾಡಿಕೊಂಡಿರಲು
ಲೋಟನಿಗೆ ಹೆದರಿಕೆಯಾಯಿತು. ಆದ್ದರಿಂದ ಅವನು
ಮತ್ತು ಅವನ ಹೆಣ್ಣು ಮಕ್ಕಳು ಬೆಟ್ಟಪ್ರದೇಶಕ್ಕೆ ಹೋಗಿ
ಗುಹೆಯೊಂದರಲ್ಲಿ ವಾಸಿಸತೊಡಗಿದರು. 31ಒಂದು ದಿನ
ಹಿರಿಯ ಮಗಳು ತನ್ನ ತಂಗಿಗೆ, ''ಭೂಲೋಕದಲ್ಲೆಲ್ಲಾ
ಸ್ತ್ರೀಯರೂ ಪುರುಷರೂ ಮದುವೆಯಾಗುತ್ತಾರೆ. ಆದರೆ
ಇಲ್ಲಿ ನಾವು ಮದುವೆಯಾಗಲು ಯಾವ ಗಂಡಸರೂ ಇಲ್ಲ.
ನಮ್ಮ ತಂದೆಗೂ ವಯಸ್ಸಾಗಿದೆ. 32ಆದರೆ ನಾವು ಮಕ್ಕ
ಳನ್ನು ನಮ್ಮ ತಂದೆಯಿಂದಲೇ ಪಡೆದುಕೊಳ್ಳೋಣ. ಆಗ
ನಮ್ಮ ಕುಟುಂಬ ಕೊನೆಗೊಳ್ಳುವುದಿಲ್ಲ. ನಮ್ಮ ತಂದೆ
ಯನ್ನು ಮತ್ತನನ್ನಾಗಿ ಮಾಡಿ ಅವನೊಂದಿಗೆ ಮಲಗಿ
ಕೊಳ್ಳೋಣ'' ಎಂದು ಹೇಳಿದಳು.
33ಆ ರಾತ್ರಿ ಅವರು ತಮ್ಮ ತಂದೆಗೆ ದ್ರಾಕ್ಷಾರಸವನ್ನು
ಕುಡಿಸಿ ಅಮಲೇರಿಸಿದರು. ಬಳಿಕ ಹಿರಿಯ ಮಗಳು ತನ್ನ
ತಂದೆಯ ಹಾಸಿಗೆಗೆ ಹೋಗಿ ಅವನೊಂದಿಗೆ ಮಲಗಿ
ಕೊಂಡಳು. ಲೋಟನು ಮತ್ತನಾಗಿದ್ದುದರಿಂದ ಆಕೆ
ಅವನೊಂದಿಗೆ ಮಲಗಿಕೊಂಡದ್ದು ಅವನಿಗೆ ತಿಳಿಯಲಿಲ್ಲ.
34ಮರುದಿನ, ಹಿರಿಯ ಮಗಳು ತನ್ನ ತಂಗಿಗೆ, ''ಕಳೆದ
ರಾತ್ರಿ ನಾನು ನನ್ನ ತಂದೆಯೊಂದಿಗೆ ಮಲಗಿಕೊಂಡೆ. ಈ
ರಾತ್ರಿಯೂ ಅವನನ್ನು ದ್ರಾಕ್ಷಾರಸ ಕುಡಿಸಿ ಅಮಲೇರಿ
ಸೋಣ. ಆಮೇಲೆ ನೀನು ಹಾಸಿಗೆಯ ಮೇಲೆ ಅವ
ನೊಂದಿಗೆ ಮಲಗಿಕೊಳ್ಳಬಹುದು. ಹೀಗೆ ನಾವು ಮಕ್ಕ
ಳನ್ನು ನಮ್ಮ ತಂದೆಯಿಂದಲೇ ಪಡೆದುಕೊಳ್ಳೋಣ''
ಎಂದು ಹೇಳಿದಳು. 35ಆ ರಾತ್ರಿಯೂ ಅವರು ತಮ್ಮ
ತಂದೆಗೆ ದ್ರಾಕ್ಷಾರಸವನ್ನು ಕುಡಿಸಿ ಅಮಲೇರಿಸಿದರು.
ಆಮೇಲೆ ಚಿಕ್ಕಮಗಳು ಅವನ ಹಾಸಿಗೆಗೆ ಹೋಗಿ ಅವ
ನೊಂದಿಗೆ ಮಲಗಿಕೊಂಡಳು. ಆಕೆ ಮಲಗಿಕೊಂಡದ್ದು
ಲೋಟನಿಗೆ ತಿಳಿಯಲಿಲ್ಲ.
36ಹೀಗೆ ಲೋಟನ ಇಬ್ಬರು ಹೆಣ್ಣು ಮಕ್ಕಳು ತಂದೆ
ಯಿಂದಲೇ ಗರ್ಭಧರಿಸಿದರು. 37ಹಿರಿಯ ಮಗಳು
ಗಂಡುಮಗನನ್ನು ಹೆತ್ತಳು. ಆಕೆ ಅವನಿಗೆ ಮೋವಾಬ್*
ಎಂದು ಹೆಸರಿಟ್ಟಳು. ಈಗ ಜೀವಿಸುತ್ತಿರುವ ಎಲ್ಲಾ
ಮೋವಾಬ್ಯರಿಗೆ ಮೋವಾಬನೇ ಮೂಲ ಪುರುಷ. 38ಚಿಕ್ಕ
ಮಗಳು ಸಹ ಗಂಡುಮಗುವನ್ನು ಹೆತ್ತಳು. ಆಕೆ ತನ್ನ ಮಗ
ನಿಗೆ ಬೆನಮ್ಮಿ* ಎಂದು ಹೆಸರಿಟ್ಟಳು. ಈಗ ಜೀವಿಸು
ತ್ತಿರುವ ಅಮ್ಮೋನ್ಯರಿಗೆ ಬೆನಮ್ಮಿಯೇ ಮೂಲ ಪುರುಷ.

## ಅಬ್ರಹಾಮನು ಗೆರಾರಿಗೆ ಹೋದದ್ದು

20 ಅಬ್ರಹಾಮನು ಅಲ್ಲಿಂದ ಹೊರಟು ನೆಗೆವ್‌ಗೆ
ಪ್ರಯಾಣಮಾಡಿ ಕಾದೇಶಿಗೂ ಶೂರಿಗೂ
ನಡುವೆ ಇದ್ದ ಗೆರಾರ್ ನಗರದಲ್ಲಿ ನೆಲೆಸಿದನು.
2ಅಬ್ರಹಾಮನು ಗೆರಾರಿನಲ್ಲಿದ್ದಾಗ ಸಾರಳು ತನಗೆ ತಂಗಿ
ಯಾಗಬೇಕೆಂದು ಹೇಳಿಕೊಂಡನು. ಗೆರಾರಿನ ರಾಜನಾ
ಗಿದ್ದ ಅಬೀಮೆಲೆಕನು ಇದನ್ನು ಕೇಳಿ ಸಾರಳನ್ನು ಪಡೆದು
ಕೊಳ್ಳಲು ಬಯಸಿದನು. ಬಳಿಕ ಅವನು ಕೆಲವು ಸೇವಕ
ರನ್ನು ಕಳುಹಿಸಿ ಆಕೆಯನ್ನು ಕರೆಯಿಸಿಕೊಂಡನು. 3ಆದರೆ
ಅಂದು ರಾತ್ರಿ ದೇವರು ಅಬೀಮೆಲೆಕನೊಡನೆ ಕನಸಿನಲ್ಲಿ
ಮಾತಾಡಿ, ''ನೀನು ಸಾಯುವೆ. ನೀನು ತೆಗೆದುಕೊಂಡಿ
ರುವ ಆ ಸ್ತ್ರೀಗೆ ಮದುವೆಯಾಗಿದೆ'' ಎಂದು ಹೇಳಿದನು.
4ಅಬೀಮೆಲೆಕನು ಇನ್ನೂ ಸಾರಳೊಡನೆ ಮಲಗಿಕೊಂಡಿ
ರಲಿಲ್ಲ. ಆದ್ದರಿಂದ ಅಬೀಮೆಲೆಕನು, ''ಯೆಹೋವನೇ,
ನಾನು ತಪ್ಪಿತಸ್ಥನಲ್ಲ. ಒಬ್ಬ ನಿರಪರಾಧಿಯನ್ನು ನೀನು

---

**ಮೋವಾಬ್** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ: ''ತಂದೆಯಿಂದ.''

**ಬೆನಮ್ಮಿ** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ: ''ನನ್ನ ತಂದೆಯ ಮಗನು'' ಅಥವಾ ''ನನ್ನ ಜನರ ಮಗನು.''

ಕೊಲ್ಲುವೆಯಾ? 5‘ಈಕೆ ನನಗೆ ತಂಗಿಯಾಗಬೇಕು’
ಎಂದು ಅಬ್ರಹಾಮನೇ ಹೇಳಿದನು. ಅಲ್ಲದೆ ಈಕೆಯೂ
‘ಅವನು ನನ್ನ ಸಹೋದರ’ ಎಂದು ಹೇಳಿದಳು. ನಾನು
ನಿರಪರಾಧಿ. ನಾನು ಮಾಡಲಿದ್ದ ತಪ್ಪು ನನಗೆ ತಿಳಿದಿ
ರಲಿಲ್ಲ’’ ಎಂದು ಹೇಳಿದನು.

6ಆಗ ದೇವರು ಅಬೀಮೆಲೆಕನಿಗೆ ಕನಸಿನಲ್ಲಿ ‘‘ಹೌದು,
ನೀನು ನಿರಪರಾಧಿಯೆಂದು ನನಗೆ ಗೊತ್ತಿದೆ, ನೀನು
ಮಾಡಲಿದ್ದ ತಪ್ಪು ನಿನಗೆ ತಿಳಿದಿರಲಿಲ್ಲವೆಂದೂ ನನಗೆ
ಗೊತ್ತಿದೆ. ಆದ್ದರಿಂದಲೇ ನಾನು ನಿನ್ನನ್ನು ಕಾಪಾಡಿದೆ.
ನನಗೆ ವಿರೋಧವಾಗಿ ಪಾಪಮಾಡಲು ನಾನು ನಿನಗೆ
ಅವಕಾಶಕೊಡಲಿಲ್ಲ. 7ಆದ್ದರಿಂದ ಅಬ್ರಹಾಮನಿಗೆ ಅವನ
ಹೆಂಡತಿಯನ್ನು ಒಪ್ಪಿಸಿಬಿಡು. ಅಬ್ರಹಾಮನು ಪ್ರವಾದಿ
ಯಾಗಿರುವುದರಿಂದ ನಿನಗೋಸ್ಕರ ಪ್ರಾರ್ಥಿಸುವನು,
ಆಗ ನೀನು ಬದುಕಿಕೊಳ್ಳುವೆ. ನೀನು ಸಾರಳನ್ನು
ಅಬ್ರಹಾಮನಿಗೆ ಹಿಂತಿರುಗಿಸದಿದ್ದರೆ, ನೀನೂ ನಿನ್ನ ಇಡೀ
ಕುಟುಂಬದವರೂ ಸಾಯುವಿರೆಂದು ನಾನು ಪ್ರಮಾಣ
ಮಾಡುತ್ತೇನೆ’’ ಎಂದು ಹೇಳಿದನು.

8ಆದ್ದರಿಂದ ಮರುದಿನ ಮುಂಜಾನೆ, ಅಬೀಮೆಲೆಕನು
ತನ್ನ ಸೇವಕರನ್ನೆಲ್ಲ ಕರೆಸಿ ತನ್ನ ಕನಸನ್ನು ತಿಳಿಸಿದನು. ಅವರಿ
ಗೆಲ್ಲಾ ತುಂಬ ಭಯವಾಯಿತು. 9ಆಮೇಲೆ ಅಬೀಮೆಲೆ
ಕನು ಅಬ್ರಹಾಮನನ್ನು ಕರೆಸಿ, ‘‘ನೀನು ನಮಗೆ ಹೀಗೇಕೆ
ಮಾಡಿದೆ? ನಿನಗೆ ವಿರೋಧವಾಗಿ ನಾನೇನು ಮಾಡಿದೆ?
ಆಕೆ ತಂಗಿಯಾಗಬೇಕೆಂದು ನೀನೇಕೆ ಸುಳ್ಳು ಹೇಳಿದೆ?
ನೀನು ನನ್ನ ರಾಜ್ಯಕ್ಕೆ ಕೇಡನ್ನು ಬರಮಾಡಿರುವೆ. ನೀನು
ಹೀಗೆ ಮಾಡಬಾರದಿತ್ತು. 10ನೀನು ಭಯಪಟ್ಟಿದ್ದೇಕೆ?
ನನಗೆ ಹೀಗೆ ಮಾಡಿದ್ದೇಕೆ?’’ ಎಂದು ಕೇಳಿದನು.

11ಅಬ್ರಹಾಮನು ಅವನಿಗೆ, ‘‘ನನಗೆ ಹೆದರಿಕೆ
ಯಾಗಿತ್ತು. ಈ ಸ್ಥಳದವರಿಗೆ ದೇವರಲ್ಲಿ ಭಯಭಕ್ತಿಯಿಲ್ಲ
ವೆಂದು ನಾನು ಭಾವಿಸಿಕೊಂಡೆ. ಯಾರಾದರೂ ನನ್ನನ್ನು
ಕೊಂದು ಸಾರಳನ್ನು ತೆಗೆದುಕೊಳ್ಳಬಹುದೆಂದು ಯೋಚಿ
ಸಿದೆ. 12ಆಕೆ ನನ್ನ ಹೆಂಡತಿಯೇನೊ ನಿಜ, ಆದರೆ ಆಕೆ
ನನಗೆ ತಂಗಿಯೂ ಆಗಬೇಕು. ಆಕೆ ನನ್ನ ತಂದೆಯ
ಮಗಳು; ನನ್ನ ತಾಯಿಯ ಮಗಳಲ್ಲ. 13ದೇವರು ನನ್ನನ್ನು
ತಂದೆಯ ಮನೆಯಿಂದ ಹೊರಡಿಸಿ ಪರಸ್ಥಳಗಳಲ್ಲಿ ಸಂಚರಿ
ಸುವಂತೆ ಮಾಡಿದ್ದರಿಂದ ನಾನು ಸಾರಳಿಗೆ, ‘ನಿನ್ನಿಂದ ನನಗೆ
ಒಂದು ಉಪಕಾರವಾಗಬೇಕು. ಅದೇನಂದರೆ ನೀನು
ನನ್ನನ್ನು ಅಣ್ಣನೆಂಬುದಾಗಿ ಹೇಳಬೇಕು ಎಂದು ಆಕೆಗೆ
ತಿಳಿಸಿದೆನು’’’ ಎಂದನು.

14ಆಗ ಅಬೀಮೆಲೆಕನು ನಡೆದ ಸಂಗತಿಯನ್ನೆಲ್ಲ ಅರ್ಥ
ಮಾಡಿಕೊಂಡು ಸಾರಳನ್ನು ಅಬ್ರಹಾಮನಿಗೆ ಒಪ್ಪಿಸಿದನು;
ಅಲ್ಲದೆ ಕುರಿಗಳನ್ನೂ ದನಗಳನ್ನೂ ಸೇವಕಸೇವಕಿಯ
ರನ್ನೂ ಕೊಟ್ಟನು. 15ಅಬೀಮೆಲೆಕನು ಅಬ್ರಹಾಮನಿಗೆ,
‘‘ಇಗೋ, ಇದು ನನ್ನ ದೇಶ. ನಿನಗೆ ಇಷ್ಟವಾದ ಸ್ಥಳದಲ್ಲಿ
ವಾಸಮಾಡು’’ ಎಂದು ಹೇಳಿದನು.

16ಅಬೀಮೆಲೆಕನು ಸಾರಳಿಗೆ, ‘‘ನಾನು ನಿನ್ನ ಅಣ್ಣನಾದ
ಅಬ್ರಹಾಮನಿಗೆ ಒಂದು ಸಾವಿರ ಬೆಳ್ಳಿಯ ನಾಣ್ಯಗಳನ್ನು
ಕೊಡುವೆ. ನಡೆದ ಈ ಘಟನೆಗಳಿಗೆ ಇದು ಪ್ರಾಯಶ್ಚಿತ್ತ
ವಾಗಿದೆ. ನೀನು ನಿಷ್ಕಳಂಕಳೆಂದು ಇದು ಪ್ರತಿಯೊಬ್ಬ
ರಿಗೂ ಸಾಕ್ಷಿಯಾಗಿರಲಿ’’ ಎಂದು ಹೇಳಿದನು.

17-18ದೇವರು ಅಬೀಮೆಲೆಕನ ಕುಟುಂಬದಲ್ಲಿರುವ
ಎಲ್ಲ ಸ್ತ್ರೀಯರನ್ನು ಬಂಜೆಯರನ್ನಾಗಿ ಮಾಡಿದ್ದನು.
ಅಬ್ರಹಾಮನ ಹೆಂಡತಿಯಾದ ಸಾರಳನ್ನು ಅಬೀಮೆಲೆ
ಕನು ಕರೆಸಿಕೊಂಡಿದ್ದೇ ಅದಕ್ಕೆ ಕಾರಣ. ಅಬ್ರಹಾಮನು
ದೇವರಲ್ಲಿ ಪ್ರಾರ್ಥಿಸಿದಾಗ ದೇವರು ಅಬೀಮೆಲೆಕನನ್ನೂ
ಅವನ ಹೆಂಡತಿಯನ್ನೂ ಸೇವಕಿಯರನ್ನೂ ಗುಣಪಡಿಸಿದ್ದ
ರಿಂದ ಅವರಿಗೆ ಮಕ್ಕಳಾದರು.

## ಸಾರಳಿಗೆ ಮಗುವಾಯಿತು

21 ಯೆಹೋವನು ಸಾರಳಿಗೆ ಮಾಡಿದ ವಾಗ್ದಾನ
ವನ್ನು ಮರೆಯದೆ ಈಡೇರಿಸಿದನು. 2ಸಾರಳು
ವೃದ್ಧನಾಗಿದ್ದ ಅಬ್ರಹಾಮನಿಂದ ಗರ್ಭಿಣಿಯಾಗಿ, ಒಂದು
ಗಂಡುಮಗುವನ್ನು ಹೆತ್ತಳು. ದೇವರು ವಾಗ್ದಾನ ಮಾಡಿ
ದಂತೆಯೇ ಈ ಸಂಗತಿಗಳೆಲ್ಲ ತಕ್ಕಕಾಲದಲ್ಲಿ ನಡೆದವು.
3ಸಾರಳು ಒಬ್ಬ ಮಗನನ್ನು ಹೆತ್ತಳು. ಅಬ್ರಹಾಮನು ಅವ
ನಿಗೆ ಇಸಾಕ* ಎಂದು ಹೆಸರಿಟ್ಟನು. 4ಇಸಾಕನಿಗೆ ಎಂಟು
ದಿನಗಳಾಗಿದ್ದಾಗ, ದೇವರ ಆಜ್ಞೆಗನುಸಾರವಾಗಿ
ಅಬ್ರಹಾಮನು ಅವನಿಗೆ ಸುನ್ನತಿ ಮಾಡಿದನು.

5ಅಬ್ರಹಾಮನಿಗೆ ನೂರು ವರ್ಷಗಳಾಗಿದ್ದಾಗ, ಅವನ
ಮಗನಾದ ಇಸಾಕನು ಹುಟ್ಟಿದನು. 6ಸಾರಳು, ‘‘ದೇವರು,
ನನ್ನನ್ನು ನಗುವಂತೆ ಮಾಡಿದ್ದಾನೆ ಇದನ್ನು ಕೇಳಿದ ಪ್ರತಿ
ಯೊಬ್ಬರು ನನ್ನೊಡನೆ ನಗುವರು. 7ಅಬ್ರಹಾಮನಿಗೆ
ಸಾರಳಲ್ಲಿ ಮಗನು ಹುಟ್ಟುತ್ತಾನೆಂದು ಯಾರೂ ಯೋಚಿ
ಸಿರಲಿಲ್ಲ. ಅಬ್ರಹಾಮನು ವೃದ್ಧನಾಗಿದ್ದರೂ ಈಗ ನಾನು
ಅವನಿಗೆ ಒಬ್ಬ ಮಗನನ್ನು ಕೊಟ್ಟಿದ್ದೇನೆ’’ ಅಂದಳು.

## ಕುಟುಂಬದಲ್ಲಾದ ಒಡಕು

8ಇಸಾಕನು ಬೆಳೆದು ಊಟ ಮಾಡುವಷ್ಟು ದೊಡ್ಡವ
ನಾದನು. ಆಗ ಅಬ್ರಹಾಮನು ಒಂದು ದೊಡ್ಡ ಔತಣ
ವನ್ನು ಮಾಡಿಸಿದನು. 9ಮೊದಲು, ಈಜಿಪ್ಟಿನ ಸೇವಕಿ
ಯಾದ ಹಾಗರಳಲ್ಲಿ ಒಬ್ಬ ಮಗನು ಹುಟ್ಟಿದ್ದನು. ಅವ
ನಿಗೂ ಅಬ್ರಹಾಮನು ತಂದೆಯಾಗಿದ್ದನು. ಆದರೆ ಆ
ಮೊದಲನೆ ಮಗನು ಇಸಾಕನಿಗೆ ತೊಂದರೆ

---

**ಇಸಾಕ** ಈ ಹೆಸರಿನ ಅರ್ಥ: ‘‘ಅವನು ನಗುತ್ತಾನೆ’’ ಅಥವಾ ‘‘ಅವನು ಸಂತೋಷಗೊಂಡಿದ್ದಾನೆ.’’

ಕೊಡುವುದನ್ನು ಸಾರಳು ಗಮನಿಸಿದಳು. [10]ಸಾರಳು
ಅಬ್ರಹಾಮನಿಗೆ, ‘‘ಆ ಸೇವಕಿಯನ್ನೂ ಅವಳ ಮಗನನ್ನೂ
ಕಳುಹಿಸಿ ಬಿಡು. ನಾವು ಸತ್ತಾಗ ನಮ್ಮ ಆಸ್ತಿಯನ್ನೆಲ್ಲ ನಮ್ಮ
ಮಗನಾದ ಇಸಾಕನೇ ಪಡೆದುಕೊಳ್ಳಲಿ; ನಮ್ಮ ಆಸ್ತಿಯಲ್ಲಿ
ಇಸಾಕನೊಡನೆ ಅವನು ಪಾಲು ಹೊಂದುವುದು ನನಗೆ
ಇಷ್ಟವಿಲ್ಲ’’ ಎಂದು ಹೇಳಿದಳು.

[11]ಅಬ್ರಹಾಮನಿಗೆ ತುಂಬ ದುಃಖವಾಯಿತು. ಅವನು
ತನ್ನ ಮಗನಾದ ಇಷ್ಮಾಯೇಲನ ಬಗ್ಗೆ ಚಿಂತಿಸ
ತೊಡಗಿದನು. [12]ಆದರೆ ದೇವರು ಅಬ್ರಹಾಮನಿಗೆ, ‘‘ಆ
ಹುಡುಗನ ಕುರಿತಾಗಲೀ ಸೇವಕಿಯ ಕುರಿತಾಗಲೀ ಚಿಂತೆ
ಮಾಡಬೇಡ. ಸಾರಳ ಇಷ್ಟದಂತೆ ಮಾಡು. ಇಸಾಕನೊ
ಬ್ಬನೇ ಬಾಧ್ಯಸ್ತನಾಗಬೇಕು. [13]ಆದರೆ ನಿನ್ನ ಸೇವಕಿಯ
ಮಗನನ್ನು ಸಹ ನಾನು ಆಶೀರ್ವದಿಸುವೆನು. ಅವನು ನಿನ್ನ
ಮಗನು. ಆದ್ದರಿಂದ ಅವನಿಂದಲೂ ನಾನು ದೊಡ್ಡ
ಜನಾಂಗವನ್ನು ಉಂಟುಮಾಡುವೆನು’’ ಎಂದು
ಹೇಳಿದನು.

[14]ಮರುದಿನ ಮುಂಜಾನೆ, ಅಬ್ರಹಾಮನು ಸ್ವಲ್ಪ
ಆಹಾರವನ್ನು ಮತ್ತು ಸ್ವಲ್ಪ ನೀರನ್ನು ತೆಗೆದು ಹಾಗರಳಿಗೆ
ಕೊಟ್ಟನು. ಹಾಗರಳು ಅವುಗಳನ್ನು ತೆಗೆದುಕೊಂಡು ತನ್ನ
ಮಗನೊಡನೆ ಅಲ್ಲಿಂದ ಹೊರಟುಹೋದಳು. ಹಾಗರಳು
ಆ ಸ್ಥಳವನ್ನು ಬಿಟ್ಟು ಬೇರ್ಷೆಬದ ಮರಳುಗಾಡಿನಲ್ಲಿ
ಅಲೆಯತೊಡಗಿದಳು.

[15]ಸ್ವಲ್ಪ ಸಮಯದ ನಂತರ, ಇದ್ದ ನೀರೆಲ್ಲಾ ಮುಗಿದು
ಹೋಯಿತು. ಕುಡಿಯುವುದಕ್ಕೆ ಏನೂ ಇರಲಿಲ್ಲ. ಆದ್ದ
ರಿಂದ ಹಾಗರಳು ತನ್ನ ಮಗನನ್ನು ಪೊದೆಯ ಕೆಳಗೆ ಮಲಗಿ
ಸಿದಳು. [16]ಹಾಗರಳು ಸ್ವಲ್ಪ ದೂರ ನಡೆದುಹೋಗಿ
ಕುಳಿತುಕೊಂಡು ತನ್ನ ಮಗನು ಸಾಯುವುದನ್ನು
ನೋಡಲಾರದೆ ಅಳತೊಡಗಿದಳು.

[17]ಮಗುವಿನ ಕೂಗು ದೇವರಿಗೆ ಕೇಳಿಸಿತು. ಆಗ ದೇವ
ದೂತನು ಪರಲೋಕದಿಂದ ಆಕೆಯನ್ನು ಕರೆದು,
‘‘ಹಾಗರಳೇ, ನಿನಗೇನಾಯಿತು? ಭಯಪಡಬೇಡ;
ಮಗುವಿನ ಕೂಗನ್ನು ಯೆಹೋವನು ಕೇಳಿದ್ದಾನೆ.
[18]ಹೋಗಿ, ಮಗುವನ್ನು ಎತ್ತಿಕೋ. ಅವನಿಂದ ದೊಡ್ಡ
ಜನಾಂಗವಾಗುವಂತೆ ಮಾಡುವೆನು’’ ಎಂದು ಹೇಳಿದನು.

[19]ಆಮೇಲೆ ದೇವರು ಹಾಗರಳಿಗೆ ಒಂದು ಬಾವಿ
ಕಾಣಿಸುವಂತೆ ಮಾಡಿದನು. ಹಾಗರಳು ಬಾವಿಗೆ ಹೋಗಿ
ತನ್ನ ತಿತ್ತಿಯಲ್ಲಿ ನೀರನ್ನು ತುಂಬಿಸಿಕೊಂಡು ಬಂದು
ಮಗುವಿಗೆ ಕುಡಿಸಿದಳು.

[20]ದೇವರು ಆ ಮಗುವಿನ ಸಂಗಡವಿದ್ದ ಕಾರಣ ಆ
ಮಗುವು ಬೆಳೆದು ದೊಡ್ಡವನಾದನು ; ಕಾಡಿನಲ್ಲಿ ವಾಸ
ವಾಗಿದ್ದು ಚತುರ ಬಿಲ್ಲುಗಾರನಾದನು. [21]ಅವನ
ತಾಯಿಯು ಅವನಿಗೆ ಈಜಿಪ್ಟಿನ ಹುಡುಗಿಯನ್ನು ತಂದು
ಮದುವೆ ಮಾಡಿಸಿದಳು. ಅವರು ಪಾರಾನ್ ಕಾಡಿನಲ್ಲಿ
ತಮ್ಮ ವಾಸವನ್ನು ಮುಂದುವರಿಸಿದರು.

## ಅಬ್ರಹಾಮನು ಅಬೀಮೆಲೆಕನೊಡನೆ ಮಾಡಿಕೊಂಡ ಒಪ್ಪಂದ

[22]ಆಮೇಲೆ ಅಬೀಮೆಲೆಕನು ಮತ್ತು ಫೀಕೋಲನು
ಅಬ್ರಹಾಮನೊಡನೆ ಮಾತಾಡಿದರು. ಫೀಕೋಲನು
ಅಬೀಮೆಲೆಕನ ಸೈನ್ಯಾಧಿಕಾರಿಯಾಗಿದ್ದನು. ಅಬೀಮೆಲೆ
ಕನು ಅಬ್ರಹಾಮನಿಗೆ, ‘‘ನೀನು ಮಾಡುವ ಪ್ರತಿಯೊಂದ
ರಲ್ಲೂ ದೇವರು ನಿನ್ನೊಡನೆ ಇದ್ದಾನೆ. [23]ಆದ್ದರಿಂದ
ನೀನು ನನ್ನೊಡನೆ ಮತ್ತು ನನ್ನ ಮಕ್ಕಳೊಡನೆ ನ್ಯಾಯ
ವಾಗಿ ನಡೆದುಕೊಳ್ಳುವುದಾಗಿ ದೇವರ ಮೇಲೆ ಪ್ರಮಾಣ
ಮಾಡು. ನನಗೂ ಮತ್ತು ನೀನು ವಾಸಿಸುತ್ತಿರುವ ಈ
ನಾಡಿಗೂ ದಯೆ ತೋರುವುದಾಗಿ ನೀನು ಪ್ರಮಾಣ
ಮಾಡು. ನಾನು ನಿನಗೆ ದಯೆತೋರಿದಂತೆ ನೀನೂ ನನಗೆ
ದಯೆತೋರುವುದಾಗಿ ಪ್ರಮಾಣಮಾಡು’’ ಎಂದು
ಹೇಳಿದನು.

[24]ಅದಕ್ಕೆ ಅಬ್ರಹಾಮನು, ‘‘ನೀನು ನನ್ನನ್ನು ನೋಡಿ
ಕೊಂಡಂತೆ ನಾನೂ ನಿನ್ನನ್ನು ನೋಡಿಕೊಳ್ಳುವೆನು’’
ಎಂದು ಪ್ರಮಾಣಮಾಡಿದನು. [25]ಆಮೇಲೆ ಅಬ್ರಹಾ
ಮನು ಅಬೀಮೆಲೆಕನಿಗೆ, ‘ನಿನ್ನ ಸೇವಕರು ನೀರಿದ್ದ
ಒಂದು ಬಾವಿಯನ್ನು ವಶಪಡಿಸಿಕೊಂಡಿದ್ದಾರೆ’ ಎಂದು
ದೂರು ಹೇಳಿದನು.

[26]ಅದಕ್ಕೆ ಅಬೀಮೆಲೆಕನು, ‘‘ಅದನ್ನು ಯಾರು ಮಾಡಿ
ದರೋ ನನಗೆ ಗೊತ್ತಿಲ್ಲ. ಇಂದಿನವರೆಗೂ ನೀನು ಇದನ್ನು
ನನಗೆ ಹೇಳಲೇ ಇಲ್ಲ’’ ಎಂದು ಹೇಳಿದನು. [27]ಆಗ
ಅಬ್ರಹಾಮನು ಮತ್ತು ಅಬೀಮೆಲೆಕನು ಒಂದು ಒಪ್ಪಂದ
ವನ್ನು ಮಾಡಿಕೊಂಡರು. ಅಬ್ರಹಾಮನು ಅವನಿಗೆ ಕೆಲವು
ದನಕುರಿಗಳನ್ನು ಒಪ್ಪಂದದ ಗುರುತಾಗಿ ಕೊಟ್ಟನು;
[28]ಅಲ್ಲದೆ ಅಬ್ರಹಾಮನು ಮಂದೆಯ ಏಳು ಹೆಣ್ಣುಕುರಿ
ಮರಿಗಳನ್ನು ಪ್ರತ್ಯೇಕಿಸಿದನು. [29]ಅಬೀಮೆಲೆಕನು
ಅಬ್ರಹಾಮನಿಗೆ, ‘‘ಈ ಏಳು ಕುರಿಗಳನ್ನು ಇಲ್ಲಿ ಇರಿಸಿರು
ವದೇಕೆ?’’ ಎಂದು ಕೇಳಿದನು.

[30]ಅಬ್ರಹಾಮನು ‘‘ಆ ಬಾವಿಯನ್ನು ತೋಡಿಸಿದವನು
ನಾನೇ ಎಂಬುದಕ್ಕೆ ಸಾಕ್ಷಿಯಾಗಿ ನೀನು ಈ ಕುರಿಗಳನ್ನು
ನನ್ನಿಂದ ಸ್ವೀಕರಿಸಿಕೊಳ್ಳಬೇಕು’’ ಎಂದು ಉತ್ತರಿಸಿದನು.

[31]ಅವರು ಆ ಸ್ಥಳದಲ್ಲಿ ಒಪ್ಪಂದ ಮಾಡಿಕೊಂಡಿದ್ದರಿಂದ
ಆ ಬಾವಿಗೆ ಬೇರ್ಷೆಬ* ಎಂದು ಹೆಸರಾಯಿತು.

[32]ಬೇರ್ಷೆಬದಲ್ಲಿ ಒಪ್ಪಂದವನ್ನು ಮಾಡಿಕೊಂಡ ಮೇಲೆ
ಅಬೀಮೆಲೆಕನು ಮತ್ತು ಅವನ ಸೈನ್ಯಾಧಿಕಾರಿಯು
ಫಿಲಿಷ್ಟಿಯರ ದೇಶಕ್ಕೆ ಹಿಂತಿರುಗಿದರು.

---

**ಬೇರ್ಷೆಬ** ಇದರರ್ಥ ‘‘ಪ್ರಮಾಣದ ಬಾವಿ.’’

33ಅಬ್ರಹಾಮನು ಬೇರ್ಷೆಬದಲ್ಲಿ ವಿಶೇಷವಾದ ಒಂದು ಮರವನ್ನು ನೆಟ್ಟನು. ಆ ಸ್ಥಳದಲ್ಲಿ ಅವನು ಸದಾ ಕಾಲ ಜೀವಿಸುವ ದೇವರಾದ ಯೆಹೋವನಿಗೆ ಪ್ರಾರ್ಥಿಸಿದನು. 34ಅವನು ಬಹುಕಾಲದವರೆಗೆ ಫಿಲಿಷ್ಟಿಯರ ದೇಶದಲ್ಲಿ ವಾಸವಾಗಿದ್ದನು.

### ಅಬ್ರಹಾಮನೇ, ನಿನ್ನ ಮಗನನ್ನು ಯಜ್ಞವಾಗಿ ಅರ್ಪಿಸು

22 ಇವುಗಳಾದ ಮೇಲೆ, ದೇವರು ಅಬ್ರಹಾಮನ ನಂಬಿಕೆಯನ್ನು ಪರೀಕ್ಷಿಸಲು ನಿರ್ಧರಿಸಿ, ‘‘ಅಬ್ರಹಾಮನೇ!’’ ಎಂದು ಕರೆದನು.

ಅಬ್ರಹಾಮನು, ‘‘ಇಗೋ ಇದ್ದೇನೆ’’ ಅಂದನು.

2ಆಗ ದೇವರು ಅವನಿಗೆ, ‘‘ನಿನಗೆ ಪ್ರಿಯನಾಗಿರುವ ನಿನ್ನ ಒಬ್ಬನೇ ಮಗನಾದ ಇಸಾಕನನ್ನು ಮೊರೀಯ ದೇಶಕ್ಕೆ ಕರೆದುಕೊಂಡು ಹೋಗು. ನಾನು ನಿನಗೆ ತಿಳಿಸುವ ಬೆಟ್ಟದ ಮೇಲೆ ಅವನನ್ನು ಯಜ್ಞವನ್ನಾಗಿ ಅರ್ಪಿಸು’’ ಎಂದು ಹೇಳಿದನು.

3ಮುಂಜಾನೆ ಅಬ್ರಹಾಮನು ಎದ್ದು ಕತ್ತೆಗೆ ತಡಿ ಹಾಕಿಸಿದನು; ಇಸಾಕನನ್ನೂ ಅವನೊಂದಿಗೆ ಇಬ್ಬರು ಸೇವಕರನ್ನೂ ಕರೆದುಕೊಂಡನು; ಯಜ್ಞಕ್ಕಾಗಿ ಕಟ್ಟಿಗೆಯನ್ನು ತೆಗೆದುಕೊಂಡನು. ಬಳಿಕ ದೇವರು ಹೇಳಿದ್ದ ಸ್ಥಳಕ್ಕೆ ಅವರು ಹೊರಟರು. 4ಅವರು ಮೂರು ದಿನಗಳವರೆಗೆ ಪ್ರಯಾಣ ಮಾಡಿದರು. ಆಬ್ರಹಾಮನು ದೃಷ್ಟಿಸಿ ನೋಡಿದಾಗ ತಾವು ಹೋಗಲಿದ್ದ ಸ್ಥಳವು ದೂರದಲ್ಲಿ ಅವನಿಗೆ ಕಾಣಿಸಿತು. 5ಆಮೇಲೆ ಅಬ್ರಹಾಮನು ತನ್ನ ಸೇವಕರಿಗೆ, ‘‘ಇಲ್ಲೇ ಕತ್ತೆಯೊಂದಿಗಿರಿ; ನಾನೂ ನನ್ನ ಮಗನೂ ಆ ಸ್ಥಳಕ್ಕೆ ಹೋಗಿ ಆರಾಧಿಸುತ್ತೇವೆ. ಬಳಿಕ ನಾವು ಹಿಂತಿರುಗಿ ನಿಮ್ಮ ಬಳಿಗೆ ಬರುತ್ತೇವೆ’’ ಎಂದು ಹೇಳಿದನು.

6ಅಬ್ರಹಾಮನು ಯಜ್ಞಕ್ಕಾಗಿ ಕಟ್ಟಿಗೆಯನ್ನು ತೆಗೆದು ತನ್ನ ಮಗನ ಭುಜದ ಮೇಲೆ ಹೊರಿಸಿದನು. ಅಬ್ರಹಾಮನು ವಿಶೇಷವಾದ ಕತ್ತಿಯನ್ನು ಮತ್ತು ಬೆಂಕಿಯನ್ನು ತೆಗೆದುಕೊಂಡನು. ಅವರಿಬ್ಬರೂ ಆರಾಧಿಸುವದಕ್ಕಾಗಿ ಆ ಸ್ಥಳಕ್ಕೆ ಹೊರಟರು.

7ಇಸಾಕನು ತನ್ನ ತಂದೆಯಾದ ಅಬ್ರಹಾಮನಿಗೆ, ‘‘ಅಪ್ಪಾ’’ ಎಂದು ಕರೆದನು.

ಅಬ್ರಹಾಮನು, ‘‘ಏನು ಮಗನೇ’’ ಎಂದು ಉತ್ತರಿಸಿದನು.

ಇಸಾಕನು, ‘‘ಕಟ್ಟಿಗೆ ಮತ್ತು ಬೆಂಕಿ ನನಗೆ ಕಾಣಿಸುತ್ತಿವೆ. ಆದರೆ ಯಜ್ಞಕ್ಕೆ ಬೇಕಾದ ಕುರಿಮರಿ ಎಲ್ಲಿ?’’ ಎಂದು ಕೇಳಿದನು.

8ಅಬ್ರಹಾಮನು, ‘‘ಮಗನೇ, ಯಜ್ಞಕ್ಕೆ ಬೇಕಾದ ಕುರಿಮರಿಯನ್ನು ದೇವರೇ ಒದಗಿಸುವನು’’ ಎಂದು ಹೇಳಿದನು.

### ಇಸಾಕನನ್ನು ರಕ್ಷಿಸಲು ದೇವರ ಪ್ರವೇಶ

ಹೀಗೆ ಅಬ್ರಹಾಮನು ಮತ್ತು ಅವನ ಮಗನು ಆ ಸ್ಥಳಕ್ಕೆ ಹೊರಟು 9ದೇವರು ತಿಳಿಸಿದ್ದ ಸ್ಥಳಕ್ಕೆ ಬಂದರು. ಅಲ್ಲಿ ಅಬ್ರಹಾಮನು ಒಂದು ಯಜ್ಞವೇದಿಕೆಯನ್ನು ಕಟ್ಟಿ ಅದರ ಮೇಲೆ ಕಟ್ಟಿಗೆಯನ್ನು ಜೋಡಿಸಿದನು; ಆ ಮೇಲೆ ಅವನು ತನ್ನ ಮಗನಾದ ಇಸಾಕನ ಕೈಕಾಲುಗಳನ್ನು ಕಟ್ಟಿ ಯಜ್ಞವೇದಿಕೆಯ ಮೇಲಿದ್ದ ಕಟ್ಟಿಗೆಯ ಮೇಲೆ ಮಲಗಿಸಿದನು. 10ಬಳಿಕ ಅವನು ತನ್ನ ಮಗನನ್ನು ವಧಿಸಲು ಕತ್ತಿಯನ್ನು ಮೇಲೆತ್ತಲು,

11ಯೆಹೋವನ ದೂತನು ಪರಲೋಕದಿಂದ, ‘‘ಅಬ್ರಹಾಮನೇ, ಅಬ್ರಹಾಮನೇ!’’ ಎಂದು ಕರೆದನು.

ಅಬ್ರಹಾಮನು, ‘‘ಇಗೋ ಇದ್ದೇನೆ’’ ಎಂದು ಉತ್ತರಿಸಿದನು.

12ಯೆಹೋವನ ದೂತನು, ‘‘ನಿನ್ನ ಮಗನನ್ನು ವಧಿಸಬೇಡ. ಅವನಿಗೆ ನೋವು ಮಾಡಬೇಡ. ನೀನು ನನಗೋಸ್ಕರವಾಗಿ ನಿನ್ನ ಒಬ್ಬನೇ ಮಗನನ್ನು ಸಮರ್ಪಿಸುವುದಕ್ಕೂ ಹಿಂಜರಿಯಲಿಲ್ಲ; ಆದ್ದರಿಂದ ನೀನು ದೇವರಲ್ಲಿ ಭಯಭಕ್ತಿಯುಳ್ಳವನೆಂದು ಈಗ ತೋರಿಬಂದಿದೆ’’ ಎಂದು ಹೇಳಿದನು.

13ಅಬ್ರಹಾಮನು ಕಣ್ಣೆತ್ತಿ ನೋಡಿದಾಗ ಒಂದು ಟಗರನ್ನು ಕಂಡನು. ಆ ಟಗರಿನ ಕೊಂಬುಗಳು ಒಂದು ಪೊದೆಗೆ ಸಿಕ್ಕಿಕೊಂಡಿದ್ದವು. ಕೂಡಲೇ ಅವನು ಹೋಗಿ, ಆ ಟಗರನ್ನು ಎಳೆದುಕೊಂಡು ಬಂದು ದೇವರಿಗೆ ತನ್ನ ಮಗನ ಬದಲಾಗಿ ಯಜ್ಞವಾಗಿ ಅರ್ಪಿಸಿದನು. 14ಅಲ್ಲದೆ ಆ ಸ್ಥಳಕ್ಕೆ ‘‘ಯೆಹೋವಯೀರೆ’’* ಎಂದು ಹೆಸರಿಟ್ಟನು. ಇಂದಿಗೂ ಜನರು, ‘‘ಯೆಹೋವನ ಬೆಟ್ಟದಲ್ಲಿ ಒದಗಿಸಲ್ಪಡುವುದು’’ ಎಂದು ಹೇಳುತ್ತಾರೆ.

15ಯೆಹೋವನ ದೂತನು ಆಕಾಶದಿಂದ ಅಬ್ರಹಾಮನನ್ನು ಎರಡನೆ ಸಲ ಕರೆದು ಅವನಿಗೆ, 16‘‘ನೀನು ನನಗೋಸ್ಕರವಾಗಿ ನಿನ್ನ ಒಬ್ಬನೇ ಮಗನನ್ನು ವಧಿಸಲು ಸಿದ್ಧನಾಗಿದ್ದೆ. ಆದ್ದರಿಂದ ನಾನು ನಿನಗೆ ಈ ವಾಗ್ದಾನವನ್ನು ಮಾಡುತ್ತೇನೆ: 17ನಾನು ನಿನ್ನನ್ನು ಖಂಡಿತವಾಗಿಯೂ ಆಶೀರ್ವದಿಸುವೆನು; ನಿನ್ನ ಸಂತತಿಯನ್ನು ಖಂಡಿತವಾಗಿಯೂ ಹೆಚ್ಚಿಸುವೆನು; ನಿನ್ನ ಸಂತತಿಯವರನ್ನು ಆಕಾಶದ ನಕ್ಷತ್ರಗಳಂತೆಯೂ ಸಮುದ್ರತೀರದ ಮರಳಿನಂತೆಯೂ ಅಸಂಖ್ಯಾತರನ್ನಾಗಿ ಮಾಡುವೆನು. ಅವರು ತಮ್ಮ ಶತ್ರುಗಳ ಪಟ್ಟಣಗಳನ್ನು ವಶಪಡಿಸಿಕೊಳ್ಳುವರು. 18ನೀನು ನನಗೆ ವಿಧೇಯನಾದ್ದರಿಂದ ನಿನ್ನ ಸಂತತಿಗಳವರ ಮೂಲಕವಾಗಿ ಭೂಮಿಯ ಮೇಲಿರುವ ಪ್ರತಿಯೊಂದು ಜನಾಂಗವೂ ಆಶೀರ್ವಾದ ಹೊಂದುವುದು’’ ಎಂದು ಹೇಳಿದನು.

---

**ಯೆಹೋವಯೀರೆ** ಇದರರ್ಥ, ‘‘ಯೆಹೋವನು ಒದಗಿಸುತ್ತಾನೆ.’’

19ತರುವಾಯ ಅಬ್ರಹಾಮನು ತನ್ನ ಸೇವಕರ ಬಳಿಗೆ
ಹಿಂತಿರುಗಿ ಹೋದನು. ಅವರೆಲ್ಲರೂ ಬೇರ್ಷೆಬಕ್ಕೆ
ಮರಳಿ ಪ್ರಯಾಣ ಮಾಡಿದರು. ಬಳಿಕೆ ಅಬ್ರಹಾಮನು
ಅಲ್ಲೇ ವಾಸಿಸಿದನು.
20ಈ ಸಂಗತಿಗಳೆಲ್ಲ ನಡೆದ ಮೇಲೆ ಅಬ್ರಹಾಮನಿಗೆ
ಒಂದು ಸಂದೇಶ ಬಂದಿತು. ಆ ಸಂದೇಶವು ಹೀಗಿತ್ತು:
‘‘ನಿನ್ನ ತಮ್ಮನಾದ ನಾಹೋರರ ಮತ್ತು ಅವನ ಹೆಂಡತಿ
ಯಾದ ಮಿಲ್ಕ ಈಗ ಮಕ್ಕಳನ್ನು ಹೊಂದಿದ್ದಾರೆ. 21ಮೊದ
ಲನೆ ಮಗನ ಹೆಸರು ಊಚ್; ಎರಡನೆ ಮಗನ ಹೆಸರು
ಬೂಚ್; ಮೂರನೆ ಮಗನ ಹೆಸರು ಕೆಮೂವೇಲ್.
ಇವನು ಆರಾಮನ ತಂದೆ. 22ಇವರಲ್ಲದೆ ಕೆಸೆದ್, ಹಜೋ,
ಪಿಲ್ದಾಷ್, ಇದ್ಲಾಫ್, ಬೆತೂವೇಲ್ ಎಂಬು ವರು ಸಹ
ಇದ್ದಾರೆ.’’ 23ಬೆತೂವೇಲನು ರೆಬೆಕ್ಕಳ ತಂದೆ. ಮಿಲ್ಕಳು
ಈ ಎಂಟು ಮಕ್ಕಳ ತಾಯಿ; ನಾಹೋರರನು ಅವರ ತಂದೆ.
ನಾಹೋರರನು ಅಬ್ರಹಾಮನ ಸಹೋದರ. 24ಇವರಲ್ಲದೆ.
ನಾಹೋರರನಿಗೆ ಅವನ ದಾಸಿಯಾದ ರೂಮಳಲ್ಲಿ ನಾಲ್ಕು
ಮಂದಿ ಗಂಡು ಮಕ್ಕಳಿದ್ದರು. ಆ ಗಂಡುಮಕ್ಕಳು
ಯಾರಾರೆಂದರೆ: ಟೆಬಹ, ಗಹಮ್, ತಹಷ್ ಮತ್ತು
ಮಾಕಾ.

## ಸಾರಳ ಮರಣ

23 ಸಾರಳು ನೂರಿಪ್ಪತ್ತೇಳು ವರ್ಷ ಬದುಕಿದ್ದಳು.
2ಅವಳು ಕಾನಾನ್ ದೇಶದ ಕಿರ್ಯತರ್ಬದಲ್ಲಿ
(ಹೆಬ್ರೋನ್)ದಲ್ಲಿ ಮರಣ ಹೊಂದಿದಳು. ಅಬ್ರಹಾ
ಮನು ಅವಳಿಗೋಸ್ಕರ ಅಲ್ಲಿ ಬಹಳವಾಗಿ ಅತ್ತನು. 3ಬಳಿಕ
ಆಕೆಯ ಶವದ ಬಳಿಯಿಂದ ಎದ್ದು ಹಿತ್ತಿಯರ ಬಳಿಗೆ
ಹೋಗಿ, 4ಅವರಿಗೆ, ‘‘ನಾನು ಈ ನಾಡಿನವನಲ್ಲ. ನಾನು
ಇಲ್ಲಿ ಕೇವಲ ಪ್ರವಾಸಿಗನಷ್ಟೇ. ಆದ್ದರಿಂದ ನನ್ನ ಹೆಂಡತಿ
ಯನ್ನು ಸಮಾಧಿ ಮಾಡಲು ನನಗೆ ಸ್ವಲ್ಪ ಸ್ಥಳ ಬೇಕು’’
ಎಂದು ಹೇಳಿದನು.
5ಹಿತ್ತಿಯರು ಅಬ್ರಹಾಮನಿಗೆ, 6‘‘ಸ್ವಾಮೀ, ನೀನು
ನಮ್ಮ ಮಹಾನಾಯಕರುಗಳಲ್ಲಿ ಒಬ್ಬನು. ತೀರಿಕೊಂಡ
ನಿನ್ನ ಹೆಂಡತಿಯ ಸಮಾಧಿಗಾಗಿ ನಮ್ಮಲ್ಲಿರುವ ಸ್ಮಶಾನಗ
ಳಲ್ಲಿ ಅತ್ಯುತ್ತಮವಾದ ಸ್ಥಳವನ್ನು ನೀನು ತೆಗೆದುಕೊಳ್ಳ
ಬಹುದು. ನಿನ್ನ ಹೆಂಡತಿಯನ್ನು ಸಮಾಧಿ ಮಾಡಲು
ನಮ್ಮಲ್ಲಿ ಯಾರೂ ಅಡ್ಡಿಮಾಡುವುದಿಲ್ಲ’’ ಎಂದು ಉತ್ತರ
ಕೊಟ್ಟನು.
7ಅಬ್ರಹಾಮನು ಎದ್ದುನಿಂತು ಅವರಿಗೆ ನಮಸ್ಕರಿಸಿ,
8ಅವರಿಗೆ, ‘‘ತೀರಿಹೋದ ನನ್ನ ಹೆಂಡತಿಯನ್ನು ಸಮಾಧಿ
ಮಾಡಲು ನೀವು ನಿಜವಾಗಿಯೂ ಸಹಾಯ ಮಾಡ
ಬೇಕೆಂದಿದ್ದರೆ, ಚೋಹರನ ಮಗನಾದ ಎಫ್ರೋನನ
ಸಂಗಡ ನನಗೋಸ್ಕರ ಮಾತಾಡಿರಿ. 9ಮಕ್ಪೇಲದ
ಗವಿಯನ್ನು ಕೊಂಡುಕೊಳ್ಳಲು ನನಗೆ ಇಷ್ಟವಿದೆ. ಅದು
ಎಫ್ರೋನನದು. ಅದು ಅವನ ಜಮೀನಿನ ಅಂಚಿನಲ್ಲಿದೆ.
ಅದಕ್ಕಾಗುವ ಬೆಲೆಯನ್ನು ನಾನು ಪೂರ್ತಿ ಕೊಡುತ್ತೇನೆ.
ನಾನು ಅದನ್ನು ಸಮಾಧಿಯ ಸ್ಥಳಕ್ಕಾಗಿ ಕೊಂಡುಕೊಂಡಿ
ರುವೆ ಎಂಬುದಕ್ಕೆ ನೀವೆಲ್ಲರೂ ಸಾಕ್ಷಿಗಳಾಗಿರಬೇಕು’’
ಎಂದು ಹೇಳಿದನು.
10ಎಫ್ರೋನನು ಪಟ್ಟಣದ ಬಾಗಿಲ ಬಳಿಯಲ್ಲಿ ಹಿತ್ತಿಯ
ರೊಂದಿಗೆ ಕುಳಿತುಕೊಂಡಿದ್ದನು. ಕೂಡಲೇ ಅವನು
ಅಬ್ರಹಾಮನಿಗೆ, 11‘‘ಸ್ವಾಮೀ ನಾನು ಆ ಸ್ಥಳವನ್ನೂ ಆ
ಗವಿಯನ್ನೂ ನನ್ನ ಜನರ ಎದುರಿನಲ್ಲಿಯೇ ನಿನಗೆ ಕೊಡು
ವೆನು. ನಿನ್ನ ಹೆಂಡತಿಯನ್ನು ಅಲ್ಲಿ ಸಮಾಧಿ ಮಾಡು’’
ಎಂದು ಹೇಳಿದನು.
12ಆಗ ಅಬ್ರಹಾಮನು ಹಿತ್ತಿಯರಿಗೆ ತಲೆಬಾಗಿ ನಮಸ್ಕ
ರಿಸಿದನು. 13ಅಬ್ರಹಾಮನು ಜನರೆಲ್ಲರ ಎದುರಿನಲ್ಲಿ
ಎಫ್ರೋನನಿಗೆ, ‘‘ಆ ಸ್ಥಳಕ್ಕಾಗುವ ಪೂರ್ತಿ ಬೆಲೆಯನ್ನು
ನಾನು ನಿನಗೆ ಕೊಡುತ್ತೇನೆ; ನೀನು ಹಣವನ್ನು ತೆಗೆದು
ಕೊಳ್ಳುವುದಾದರೆ, ನನ್ನ ಹೆಂಡತಿಯನ್ನು ಅಲ್ಲಿ ಸಮಾಧಿ
ಮಾಡುವೆನು’’ ಎಂದು ಹೇಳಿದನು. 14ಎಫ್ರೋನನು
ಅಬ್ರಹಾಮನಿಗೆ, 15‘‘ಸ್ವಾಮೀ, ನನ್ನ ಮಾತನ್ನು ಕೇಳು.
ಆ ಸ್ಥಳದ ಬೆಲೆ ನಾನೂರು ಬೆಳ್ಳಿ ರೂಪಾಯಿಗಳಷ್ಟೇ.
ಆದರೆ ನಿನಗಾಗಲೀ, ನನಗಾಗಲೀ ಆ ನಾನೂರು
ರೂಪಾಯಿ ಏನು ವಿಶೇಷ? ಸ್ಥಳವನ್ನು ತೆಗೆದುಕೊಂಡು
ನಿನ್ನ ಹೆಂಡತಿಯನ್ನು ಸಮಾಧಿಮಾಡು’’ ಎಂದು ಉತ್ತರ
ಕೊಟ್ಟನು. 16ಆಗ ಅಬ್ರಹಾಮನು ಆ ಸ್ಥಳಕ್ಕಾಗಿ ನಾನೂರು
ಬೆಳ್ಳಿ ರೂಪಾಯಿಗಳನ್ನು ಎಫ್ರೋನನಿಗೆ ಎಣಿಸಿಕೊಟ್ಟನು.
17-18ಈ ಜಮೀನು ಮಮ್ರೆಗೆ ಪೂರ್ವದಲ್ಲಿರುವ
ಮಕ್ಪೇಲದಲ್ಲಿತ್ತು. ಅಬ್ರಹಾಮನು ಆ ಜಮೀನಿಗೂ ಅದರ
ಲ್ಲಿದ್ದ ಗವಿಗೂ ಜಮೀನಿನಲ್ಲಿದ್ದ ಎಲ್ಲಾ ಮರಗಳಿಗೂ
ಒಡೆಯನಾದನು. ಎಫ್ರೋನನಿಗೂ ಅಬ್ರಹಾಮನಿಗೂ
ಆದ ಒಪ್ಪಂದಕ್ಕೆ ನಗರದವರೆಲ್ಲರು ಸಾಕ್ಷಿಗಳಾದರು.
19ಬಳಿಕ ಅಬ್ರಹಾನು ತನ್ನ ಹೆಂಡತಿಯಾದ ಸಾರಳನ್ನು
ಮಮ್ರೆಗೆ ಸಮೀಪದಲ್ಲಿದ್ದ ಜಮೀನಿನ ಗವಿಯಲ್ಲಿ ಸಮಾಧಿ
ಮಾಡಿದನು. (ಅದು ಕಾನಾನ್ ದೇಶದ ಹೆಬ್ರೋನ್).
20ಅಬ್ರಹಾನು ಆ ಜಮೀನನ್ನು ಮತ್ತು ಅದರಲ್ಲಿದ್ದ
ಗವಿಯನ್ನು ಹಿತ್ತಿಯರಿಂದ ಕೊಂಡುಕೊಂಡನು. ಅದು
ಅವನ ಆಸ್ತಿಯಾಯಿತು. ಅವನು ಅದನ್ನು ಸಮಾಧಿ
ಸ್ಥಳವನ್ನಾಗಿ ಉಪಯೋಗಿಸಿದನು.

## ಇಸಾಕನಿಗಾಗಿ ಹೆಂಡತಿ

24 ಅಬ್ರಹಾಮನು ಬಹಳ ವೃದ್ಧನಾದನು.
ಯೆಹೋವನು ಅಬ್ರಹಾಮನನ್ನೂ ಅವನು
ಮಾಡಿದ ಪ್ರತಿಯೊಂದನ್ನೂ ಆಶೀರ್ವದಿಸಿದನು.

2ಅಬ್ರಹಾಮನ ಆಸ್ತಿಯನ್ನೆಲ್ಲಾ ನೋಡಿಕೊಳ್ಳಲು ಒಬ್ಬ
ಸೇವಕನಿದ್ದನು. ಅಬ್ರಹಾಮನು ಆ ಸೇವಕನನ್ನು ಕರೆದು,
''ನನ್ನ ತೊಡೆಯ ಕೆಳಗೆ ನಿನ್ನ ಕೈಯಿಟ್ಟು ನನಗೆ ಪ್ರಮಾಣ
ಮಾಡು. 3ಕಾನಾನ್ ದೇಶದ ಕನ್ನಿಕೆಯನ್ನು ನನ್ನ ಮಗನು
ಮದುವೆಯಾಗದಂತೆ ನೀನು ನೋಡಿಕೊಳ್ಳುವುದಾ
ಗಿಯೂ 4ನನ್ನ ಸ್ವದೇಶದಲ್ಲಿರುವ ನನ್ನ ಸ್ವಜನರ ಬಳಿಗೂ
ಹೋಗಿ ನನ್ನ ಮಗನಾದ ಇಸಾಕನಿಗೆ ಕನ್ನಿಕೆಯನ್ನು
ಹುಡುಕಿ ಕರೆದುಕೊಂಡು ಬರುವುದಾಗಿಯೂ ಭೂಪರ
ಲೋಕಗಳ ದೇವರಾದ ಯೆಹೋವನ ಮೇಲೆ ಪ್ರಮಾಣ
ಮಾಡು'' ಎಂದು ಹೇಳಿದನು.

5ಸೇವಕನು ಅವನಿಗೆ, ''ಆ ಕನ್ಯೆಯು ನನ್ನೊಡನೆ ಈ
ದೇಶಕ್ಕೆ ಬರಲು ಒಪ್ಪದಿದ್ದರೆ, ನಾನು ನಿನ್ನ ಮಗನನ್ನು ನಿನ್ನ
ಸ್ವದೇಶಕ್ಕೆ ಕರೆದುಕೊಂಡು ಹೋಗಬೇಕೇ?'' ಎಂದು
ಕೇಳಿದನು.

6ಅಬ್ರಹಾಮನು ಅವನಿಗೆ, ''ಇಲ್ಲ, ಆ ದೇಶಕ್ಕೆ ನನ್ನ
ಮಗನನ್ನು ಕರೆದುಕೊಂಡು ಹೋಗಬೇಡ. 7ಪರ
ಲೋಕದ ದೇವರಾದ ಯೆಹೋವನು ನನ್ನನ್ನು ಸ್ವದೇಶ
ದಿಂದ ಈ ಸ್ಥಳಕ್ಕೆ ಕರೆದುಕೊಂಡು ಬಂದನು. ಆ ದೇಶ
ನನ್ನ ತಂದೆಗೂ ನನ್ನ ಕುಟುಂಬಕ್ಕೂ ಸೇರಿದೆ. ಆದರೆ
ಯೆಹೋವನು ಈ ದೇಶವನ್ನು ನನ್ನ ಕುಟುಂಬಕ್ಕೆ ಕೊಡು
ವುದಾಗಿ ವಾಗ್ದಾನ ಮಾಡಿದನು. ನೀನು ನನ್ನ ಮಗನಿಗೆ
ಕನ್ಯೆಯನ್ನು ಹುಡುಕಿ ಕರೆದುಕೊಂಡು ಬರಲು ಸಾಧ್ಯ
ವಾಗುವಂತೆ ಯೆಹೋವನು ತನ್ನ ದೂತನನ್ನು ನಿನ್ನ
ಮುಂದೆ ಕಳುಹಿಸಲಿ. 8ಆದರೆ ಆ ಕನ್ಯೆಯು ನಿನ್ನೊಡನೆ
ಬರಲು ಇಷ್ಟಪಡದಿದ್ದರೆ, ಈ ಪ್ರಮಾಣದಿಂದ ನೀನು
ಬಿಡುಗಡೆಯಾಗುವೆ. ಆದರೆ ನೀನು ನನ್ನ ಮಗನನ್ನು ನನ್ನ
ಸ್ವದೇಶಕ್ಕೆ ಕರೆದುಕೊಂಡು ಹೋಗಕೂಡದು'' ಎಂದು
ಹೇಳಿದನು.

9ಆಗ ಆ ಸೇವಕನು ತನ್ನ ಒಡೆಯನಾದ ಅಬ್ರಹಾಮನ
ತೊಡೆಯ ಕೆಳಗೆ ಕೈಯಿಟ್ಟು ಪ್ರಮಾಣ ಮಾಡಿದನು.

## ಕನ್ಯೆಯನ್ನು ಹುಡುಕಲು ಪ್ರಯಾಣ

10ಆ ಸೇವಕನು ಅಬ್ರಹಾಮನ ಹತ್ತು ಒಂಟೆಗಳನ್ನು ಸಿದ್ಧ
ಮಾಡಿ ಶ್ರೇಷ್ಠವಾದ ಅನೇಕ ಉಡುಗೊರೆಗಳನ್ನು ತೆಗೆದು
ಕೊಂಡು ಮೆಸೊಪೊಟೊಮಿಯಕ್ಕೆ ಬಂದು
ನಾಹೋರನು ವಾಸವಾಗಿದ್ದ ಊರನ್ನು ತಲುಪಿದನು.
11ಅವನು ಊರ ಹೊರಗಿದ್ದ ಬಾವಿಯ ಬಳಿಯಲ್ಲಿ ಒಂಟೆ
ಗಳನ್ನು ಮಲಗಿಸಿದನು; ಪ್ರತಿ ಸಾಯಂಕಾಲ ಸ್ತ್ರೀಯರು
ನೀರನ್ನು ತೆಗೆದುಕೊಂಡು ಹೋಗುವದಕ್ಕಾಗಿ ಆ ಬಾವಿಗೆ
ಬರುತ್ತಿದ್ದರು.

12ಆ ಸೇವಕನು, ''ಯೆಹೋವನೇ, ನೀನು ನನ್ನ ಒಡೆ
ಯನಾದ ಅಬ್ರಹಾಮನ ದೇವರು. ಈ ದಿನ ಅವನ ಮಗ
ನಿಗಾಗಿ ಕನ್ಯೆಯನ್ನು ಕಂಡುಕೊಳ್ಳಲು ಸಹಾಯಮಾಡು.
ನನ್ನ ಒಡೆಯನಾದ ಅಬ್ರಹಾಮನಿಗೋಸ್ಕರವಾಗಿಯೇ
ಈ ಉಪಕಾರ ಮಾಡು. 13ನಾನು ಈ ನೀರಿನ ಬಾವಿಯ
ಬಳಿಯಲ್ಲಿ ನಿಂತಿರುತ್ತೇನೆ; ಈ ಊರಿನ ಯುವತಿಯರು
ನೀರನ್ನು ತೆಗೆದುಕೊಳ್ಳಲು ಇಲ್ಲಿಗೆ ಬರುತ್ತಾರೆ.
14ಇಸಾಕನಿಗೆ ಯೋಗ್ಯಳಾದ ಕನ್ಯೆಯನ್ನು ಕಂಡುಕೊಳ್ಳಲು
ನಾನು ಒಬ್ಬಳಿಗೆ, 'ದಯವಿಟ್ಟು ನಿನ್ನ ಕೊಡವನ್ನು ಕೆಳಗಿಳಿಸಿ
ಕುಡಿಯಲು ನೀರು ಕೊಡು' ಎನ್ನುವೆ. ಆಕೆ ನನಗೆ,
'ನೀನೂ ಕುಡಿ, ನಿನ್ನ ಒಂಟೆಗಳಿಗೂ ನೀರು ಕೊಡುತ್ತೇನೆ'
ಅನ್ನುವಳೋ ಆಕೆಯೇ ನಿನ್ನಿಂದ ಆಯ್ಕೆಗೊಂಡ ಯೋಗ್ಯ
ಕನ್ಯೆಯೆಂದು ನೀನು ನನ್ನ ಒಡೆಯನಿಗೆ ಕರುಣೆ ತೋರಿದೆ
ಯೆಂದು ನಾನು ತಿಳಿದುಕೊಳ್ಳುವೆ'' ಎಂದು
ಪ್ರಾರ್ಥಿಸಿದನು.

## ಕನ್ಯೆಯ ಆಯ್ಕೆ

15ಆ ಸೇವಕನು ಪ್ರಾರ್ಥನೆ ಮಾಡಿ ಮುಗಿಸುವುದಕ್ಕಿಂತ
ಮೊದಲೇ ರೆಬೆಕ್ಕಳು ಎಂಬ ಯುವತಿಯು ಬಾವಿಯ
ಬಳಿಗೆ ಬಂದಳು. ರೆಬೆಕ್ಕಳು ಬೆತೂವೇಲನ ಮಗಳು.
ಬೆತೂವೇಲನು ಮಿಲ್ಕಳ ಮತ್ತು ನಾಹೋರನ ಮಗನು.
ನಾಹೋರನು ಅಬ್ರಹಾಮನ ತಮ್ಮ. ರೆಬೆಕ್ಕಳು ತನ್ನ
ಹೆಗಲ ಮೇಲೆ ನೀರಿನ ಕೊಡವನ್ನು ತೆಗೆದುಕೊಂಡು
ಬಾವಿಗೆ ಬಂದಳು. 16ಆಕೆ ತುಂಬ ಸುಂದರವಾಗಿದ್ದಳು.
ಆಕೆ ಕನ್ನಿಕೆಯಾಗಿದ್ದಳು. ಆಕೆ ಬಾವಿಯ ಬಳಿಗೆ ಹೋಗಿ
ಕೊಡದಲ್ಲಿ ನೀರನ್ನು ತುಂಬಿಸಿಕೊಂಡಳು. 17ಆಗ ಆ
ಸೇವಕನು ಅವಳ ಬಳಿಗೆ ಓಡಿ ಹೋಗಿ, ''ದಯವಿಟ್ಟು
ಕುಡಿಯಲು ನಿನ್ನ ಕೊಡದಿಂದ ಸ್ವಲ್ಪ ನೀರನ್ನು ಕೊಡು''
ಎಂದು ಕೇಳಿದನು.

18ರೆಬೆಕ್ಕಳು ಕೂಡಲೇ ತನ್ನ ಕೊಡವನ್ನು ಹೆಗಲ
ಮೇಲಿಂದ ಕೆಳಗಿಳಿಸಿ ಅವನಿಗೆ ಕುಡಿಯಲು ನೀರನ್ನು
ಕೊಟ್ಟು, ''ಅಯ್ಯಾ, ನೀರನ್ನು ಕುಡಿ'' ಅಂದಳು. 19ಅವನು
ನೀರು ಕುಡಿದಾದ ಮೇಲೆ ಆಕೆ ಅವನಿಗೆ, ''ನಿನ್ನ ಒಂಟೆ
ಗಳಿಗೂ ಬೇಕಾದಷ್ಟು ನೀರನ್ನು ತಂದುಕೊಡುತ್ತೇನೆ''
ಎಂದು ಹೇಳಿ, 20ನೀರನ್ನೆಲ್ಲ ತೊಟ್ಟಿಯಲ್ಲಿ ಸುರಿದು ಮತ್ತೆ
ನೀರನ್ನು ತೆಗೆದುಕೊಂಡು ಬರಲು ಬಾವಿಯ ಬಳಿಗೆ
ಬೇಗಬೇಗನೆ ಹೋದಳು. ಹೀಗೆ ಅವನ ಒಂಟೆಗಳಿಗೆಲ್ಲಾ
ನೀರನ್ನು ಕೊಟ್ಟಳು.

21ಆ ಸೇವಕನು ಆಕೆಯನ್ನೇ ಗಮನಿಸುತ್ತಾ
ಯೆಹೋವನು ತನ್ನ ಪ್ರಾರ್ಥನೆಗೆ ಉತ್ತರ ಕೊಟ್ಟನೊ
ಇಲ್ಲವೊ ಎಂದು ಖಚಿತಪಡಿಸಿಕೊಳ್ಳಲು ಕಾದುಕೊಂಡಿ
ದ್ದನು.

22ಒಂಟೆಗಳು ನೀರನ್ನು ಕುಡಿದಾದ ಮೇಲೆ ಅವನು
ರೆಬೆಕ್ಕಳಿಗೆ ಅರ್ಧತೊಲೆಯ ಒಂದು ಚಿನ್ನದ

ಉಂಗುರವನ್ನು ಕೊಟ್ಟನು. ಇದಲ್ಲದೆ ಅವನು ಆಕೆಗೆ ಐದೈದು ತೊಲೆಯ ಎರಡು ಚಿನ್ನದ ಬಳೆಗಳನ್ನು ಕೊಟ್ಟನು. 23ಆ ಸೇವಕನು, ''ನಿನ್ನ ತಂದೆ ಯಾರು? ನನ್ನ ಜನರು ಇಳಿದುಕೊಳ್ಳಲು ನಿನ್ನ ತಂದೆಯ ಮನೆಯಲ್ಲಿ ಸ್ಥಳವಿದೆಯೊ?'' ಎಂದು ಕೇಳಿದನು.

24ರೆಬೆಕ್ಕಳು ಅವನಿಗೆ, ''ನನ್ನ ತಂದೆಯ ಹೆಸರು ಬೆತೂವೇಲ. ಅವನು ಮಿಲ್ಕಳ ಮತ್ತು ನಾಹೋರರ ಮಗನು'' ಎಂದು ಹೇಳಿದಳು.

25ಬಳಿಕ, ''ಹೌದು, ನಿನ್ನ ಒಂಟೆಗಳಿಗೆ ಹುಲ್ಲೂ ಮೇವೂ ನಮ್ಮಲ್ಲಿವೆ ಮತ್ತು ನೀವು ಇಳಿದುಕೊಳ್ಳಲೂ ಸ್ಥಳವಿದೆ'' ಎಂದಳು.

26ಆಗ ಆ ಸೇವಕನು ತಲೆಬಾಗಿ ಯೆಹೋವನನ್ನು ಆರಾಧಿಸಿದನು. 27ಬಳಿಕ ಆಕೆಗೆ, ''ನನ್ನ ಒಡೆಯನಾದ ಅಬ್ರಹಾಮನ ದೇವರಾದ ಯೆಹೋವನಿಗೆ ಸ್ತೋತ್ರವಾಗಲಿ. ಆತನು ನನ್ನ ಒಡೆಯನಿಗೆ ದಯಾಳುವೂ ನಂಬಿಗಸ್ತನೂ ಆಗಿದ್ದಾನೆ. ನನ್ನ ಒಡೆಯನ ಮಗನಿಗಾಗಿ ಯೆಹೋವನು ನನ್ನನ್ನು ನನ್ನ ಒಡೆಯನ ಕುಟುಂಬಕ್ಕೆ ನಡೆಸಿದ್ದಾನೆ'' ಎಂದು ಹೇಳಿದನು.

28ಆಗ ರೆಬೆಕ್ಕಳು ಬೇಗನೆ ಹೋಗಿ ಈ ಸಂಗತಿಗಳನ್ನೆಲ್ಲಾ ತನ್ನ ಕುಟುಂಬದವರಿಗೆ ತಿಳಿಸಿದಳು. 29-30ರೆಬೆಕ್ಕಳಿಗೆ ಒಬ್ಬ ಅಣ್ಣನಿದ್ದನು. ಅವನ ಹೆಸರು ಲಾಬಾನ. ನಡೆದ ಸಂಗತಿಗಳನ್ನೆಲ್ಲ ರೆಬೆಕ್ಕಳು ಅವನಿಗೆ ತಿಳಿಸಿದಳು. ಲಾಬಾನನು ಆಕೆಯ ಮಾತುಗಳನ್ನೆಲ್ಲ ಕೇಳಿದಾಗ ಮತ್ತು ಉಂಗುರವನ್ನು ಮತ್ತು ಕೈಗಳಲ್ಲಿದ್ದ ಬಳೆಗಳನ್ನು ಕಂಡಾಗ ಬಾವಿಯ ಬಳಿಗೆ ಓಡಿಹೋದನು. ಬಾವಿಯ ಬಳಿಯಲ್ಲಿ ಒಂಟೆಗಳ ಹತ್ತಿರ ಆ ಸೇವಕನು ನಿಂತುಕೊಂಡಿದ್ದನು. 31ಲಾಬಾನನು ಅವನಿಗೆ, ''ಯೆಹೋವನ ಆಶೀರ್ವಾದ ಹೊಂದಿದವನೇ, ಒಳಗೆ ಬಾ. ನೀನು ಹೊರಗಡೆ ನಿಂತುಕೊಳ್ಳಬೇಕಾಗಿಲ್ಲ, ನೀನು ಇಳಿದುಕೊಳ್ಳುವುದಕ್ಕಾಗಿ ಕೋಣೆಯನ್ನೂ ನಿನ್ನ ಒಂಟೆಗಳಿಗಾಗಿ ಸ್ಥಳವನ್ನೂ ಸಿದ್ಧಪಡಿಸಿದ್ದೇನೆ''ಎಂದು ಹೇಳಿದನು.

32ಆದ್ದರಿಂದ ಅಬ್ರಹಾಮನ ಸೇವಕನು ಲಾಬಾನನ ಮನೆಗೆ ಹೋದನು. ಒಂಟೆಗಳ ಮೇಲಿದ್ದ ಹೊರೆಗಳನ್ನು ಇಳಿಸಲು ಲಾಬಾನನು ಸಹಾಯಮಾಡಿದನು; ಒಂಟೆಗಳಿಗೆ ಸ್ಥಳಮಾಡಿಕೊಟ್ಟು ಮೇವನ್ನು ಕೊಡಿಸಿದನು; ಆಮೇಲೆ ಆ ಸೇವಕನಿಗೆ ಮತ್ತು ಅವನ ಸಂಗಡ ಇದ್ದವರಿಗೆ, ಕಾಲು ತೊಳೆದುಕೊಳ್ಳಲು ನೀರು ಕೊಟ್ಟನು. 33ನಂತರ ಲಾಬಾನನು ಅವನಿಗೆ ಊಟವನ್ನು ಕೊಟ್ಟನು. ಆದರೆ ಆ ಸೇವಕನು ಊಟಮಾಡದೆ ಅವರಿಗೆ, ''ನಾನು ಬಂದ ಉದ್ದೇಶವನ್ನು ತಿಳಿಸದೆ ಊಟ ಮಾಡುವುದಿಲ್ಲ'' ಎಂದು ಹೇಳಿದನು.

ಅದಕ್ಕೆ ಲಾಬಾನನು, ''ಸರಿ, ಹೇಳು'' ಅಂದನು.

## ರೆಬೆಕ್ಕಳನ್ನು ಇಸಾಕನಿಗಾಗಿ ಕೇಳಿದ್ದು

34ಆ ಸೇವಕನು ''ನಾನು ಅಬ್ರಹಾಮನ ಸೇವಕನು.
35ಯೆಹೋವನು ನನ್ನ ಒಡೆಯನನ್ನು ಪ್ರತಿಯೊಂದರಲ್ಲಿಯೂ ಬಹಳವಾಗಿ ಆಶೀರ್ವದಿಸಿದ್ದಾನೆ. ನನ್ನ ಒಡೆಯನು ಮಹಾವ್ಯಕ್ತಿಯಾಗಿದ್ದಾನೆ. ಯೆಹೋವನು ಅಬ್ರಹಾಮನಿಗೆ ಅನೇಕ ಕುರಿಹಿಂಡುಗಳನ್ನೂ ದನಕರುಗಳ ಮಂದೆಗಳನ್ನೂ ಕೊಟ್ಟಿದ್ದಾನೆ. ಅಬ್ರಹಾಮನಿಗೆ ಬೇಕಾದಷ್ಟು ಬೆಳ್ಳಿಬಂಗಾರಗಳಿವೆ. ಅನೇಕ ಸೇವಕರಿದ್ದಾರೆ. ಅನೇಕ ಒಂಟೆಗಳೂ ಕತ್ತೆಗಳೂ ಇವೆ. 36ಸಾರಳು ನನ್ನ ಒಡೆಯನ ಹೆಂಡತಿ. ಆಕೆ ತುಂಬಾ ವಯಸ್ಸಾಗಿರುವಾಗ ಒಬ್ಬ ಗಂಡು ಮಗನನ್ನು ಹೆತ್ತಳು. ನನ್ನ ಒಡೆಯನು ತನ್ನ ಆಸ್ತಿಯನ್ನೆಲ್ಲ ಆ ಮಗನಿಗೇ ಕೊಟ್ಟಿದ್ದಾನೆ. 37ನನ್ನ ಒಡೆಯನು ನನ್ನಿಂದ ಒಂದು ಪ್ರಮಾಣವನ್ನು ಬಲವಂತವಾಗಿ ಮಾಡಿಸಿದನು. ನನ್ನ ಒಡೆಯನು ನನಗೆ, 'ನನ್ನ ಮಗನಿಗೆ ಕಾನಾನಿನ ಹುಡುಗಿಯೊಡನೆ ಮದುವೆಯಾಗದಂತೆ ನೀನು ನೋಡಿಕೊಳ್ಳಬೇಕು; ನಾವು ಈ ಜನರೊಡನೆ ವಾಸಿಸುತ್ತಿದ್ದೇವೆ. ಆದರೆ ಕಾನಾನಿನ ಹುಡುಗಿಯೊಂದಿಗೆ ನನ್ನ ಮಗನಿಗೆ ಮದುವೆಯಾಗುವುದು ನನಗೆ ಇಷ್ಟವಿಲ್ಲ.
38ಆದ್ದರಿಂದ ನೀನು ನನ್ನ ಸ್ವದೇಶಕ್ಕೆ ಹೋಗಿ ನನ್ನ ಸ್ವಜನರಿಂದಲೇ ನನ್ನ ಮಗನಿಗೆ ಕನ್ಯೆಯನ್ನು ತೆಗೆದುಕೊಳ್ಳಬೇಕು' ಎಂದು ಹೇಳಿದನು. 39ನಾನು ನನ್ನ ಒಡೆಯನಿಗೆ, 'ಆ ಕನ್ಯೆಯು ಈ ದೇಶಕ್ಕೆ ನನ್ನೊಂದಿಗೆ ಬರಲು ಒಪ್ಪದಿರಬಹುದು' ಎಂದು ಹೇಳಿದೆ. 40ಆದರೆ ನನ್ನ ಒಡೆಯನು ನನಗೆ, 'ನಾನು ಯೆಹೋವನ ಸೇವೆ ಮಾಡುತ್ತಿದ್ದೇನೆ. ಆದ್ದರಿಂದ ಯೆಹೋವನು ತನ್ನ ದೂತನನ್ನು ನಿನ್ನೊಂದಿಗೆ ಕಳುಹಿಸಿ ನಿನಗೆ ಸಹಾಯ ಮಾಡುವನು. ಅಲ್ಲಿರುವ ನನ್ನ ತಂದೆಯ ಕುಟುಂಬದವರಲ್ಲಿ ನೀನು ನನ್ನ ಮಗನಿಗಾಗಿ ಒಬ್ಬ ಕನ್ಯೆಯನ್ನು ಕಂಡುಕೊಳ್ಳುವೆ. 41ಆದರೆ ನೀನು ನನ್ನ ತಂದೆಯ ನಾಡಿಗೆ ಹೋದಾಗ ಅವರು ನನ್ನ ಮಗನಿಗೆ ಒಬ್ಬ ಕನ್ಯೆಯನ್ನು ಕೊಡಲು ಒಪ್ಪದಿದ್ದರೆ ನೀನು ಈ ಪ್ರಮಾಣದಿಂದ ಬಿಡುಗಡೆಯಾಗಿರುವೆ' ಎಂದು ಹೇಳಿದನು.

42''ಇಂದು ನಾನು ಈ ಬಾವಿಯ ಬಳಿಗೆ ಬಂದು, 'ನನ್ನ ಒಡೆಯನಾದ ಅಬ್ರಹಾಮನ ದೇವರೇ, ಯೆಹೋವನೇ, ದಯವಿಟ್ಟು ನನ್ನ ಪ್ರವಾಸವನ್ನು ಯಶಸ್ವಿಗೊಳಿಸು.
43ನಾನು ಬಾವಿಯ ಬಳಿಯಲ್ಲಿ ನಿಂತುಕೊಂಡು ನೀರನ್ನು ತೆಗೆದುಕೊಳ್ಳಲು ಬರುವ ಒಬ್ಬ ಯುವತಿಗಾಗಿ ಕಾದಿರುತ್ತೇನೆ. ಆ ಮೇಲೆ ನಾನು ಆಕೆಗೆ, ''ದಯವಿಟ್ಟು ಕುಡಿಯಲು ನಿನ್ನ ಕೊಡದಿಂದ ನೀರನ್ನು ಕೊಡು'' ಎಂದು ಕೇಳುತ್ತೇನೆ. 44ಅವಳು ನನಗೆ, ''ನೀನೂ ನೀರನ್ನು ಕುಡಿ, ನಿನ್ನ ಒಂಟೆಗಳಿಗೂ ನೀರನ್ನು ತಂದುಕೊಡುವೆ'' ಎಂದು ಹೇಳಿದರೆ, ನನ್ನ ಒಡೆಯನ ಮಗನಿಗೆ ಯೆಹೋವನು

ಆರಿಸಿಕೊಂಡಿರುವ ಹುಡುಗಿ ಇವಳೇ ಎಂಬುದಾಗಿ
ತಿಳಿದುಕೊಳ್ಳುವೆ'ಎಂದು ಪ್ರಾರ್ಥಿಸಿದೆ.
45''ನಾನು ಪ್ರಾರ್ಥನೆ ಮುಗಿಸುವಷ್ಟರಲ್ಲಿ ರೆಬೆಕ್ಕಳು
ನೀರಿಗಾಗಿ ಬಾವಿಗೆ ಬಂದಳು. ಆಕೆ ಹೆಗಲ ಮೇಲೆ ಕೊಡ
ವನ್ನು ಹೊತ್ತು ಕೊಂಡಿದ್ದಳು. ಆಕೆ ಬಾವಿಗೆ ಹೋಗಿ
ನೀರನ್ನು ತೆಗೆದುಕೊಂಡಳು. ನಾನು ಆಕೆಗೆ, ದಯವಿಟ್ಟು
ಸ್ವಲ್ಪ ನೀರನ್ನು ಕೊಡು ಎಂದು ಕೇಳಿದೆ. 46ಆ ಕೂಡಲೆ
ಆಕೆಯು ಕೊಡವನ್ನು ಹೆಗಲಿನಿಂದ ಕೆಳಗಿಳಿಸಿ, ನನಗೆ
ನೀರನ್ನು ಕೊಟ್ಟು, 'ನೀರನ್ನು ಕುಡಿ; ನೀನ್ನ ಒಂಟೆಗಳಿಗೂ
ನೀರನ್ನು ತಂದುಕೊಡುವೆ' ಎಂದು ಹೇಳಿದಳು. ನಾನು
ನೀರನ್ನು ಕುಡಿದ ಮೇಲೆ ಆಕೆ ನನ್ನ ಒಂಟೆಗಳಿಗೂ
ನೀರನ್ನು ತಂದುಕೊಟ್ಟಳು. 47ಆಮೇಲೆ ನಾನು ಆಕೆಗೆ,
'ನಿನ್ನ ತಂದೆ ಯಾರು?' ಎಂದು ಕೇಳಿದೆ, ಆಕೆ 'ನನ್ನ
ತಂದೆಯ ಹೆಸರು ಬೆತೂವೇಲ. ಅವನು ಮಿಲ್ಕಳ ಮತ್ತು
ನಾಹೋರರ ಮಗನು' ಎಂದು ಹೇಳಿದಳು. ಆಗ ನಾನು
ಆಕೆಗೆ ಉಂಗುರವನ್ನೂ ಕೈಬಳೆಗಳನ್ನೂ ಕೊಟ್ಟೆನು. 48ಆ
ಸಮಯದಲ್ಲಿ ನಾನು ತಲೆಬಾಗಿ ಯೆಹೋವನಿಗೆ ವಂದನೆ
ಸಲ್ಲಿಸಿದೆನು. ನನ್ನ ಒಡೆಯನಾದ ಅಬ್ರಹಾಮನ ದೇವ
ರಾದ ಯೆಹೋವನನನ್ನು ಸ್ತುತಿಸಿ ಕೊಂಡಾಡಿದೆನು;
ಯಾಕಂದರೆ ಆತನು ನನ್ನನ್ನು ನನ್ನ ಒಡೆಯನ ತಮ್ಮನ
ಮೊಮ್ಮಗಳ ಬಳಿಗೆ ನೇರವಾಗಿ ನಡೆಸಿದನು. 49ಈಗ ನಿಮ್ಮ
ಅಭಿಪ್ರಾಯವನ್ನು ತಿಳಿಸಿರಿ. ನೀವು ನನ್ನ ಒಡೆಯನಿಗೆ
ಕರುಣೆಯಿಂದಲೂ ನಂಬಿಕೆಯಿಂದಲೂ ನಿಮ್ಮ ಮಗ
ಳನ್ನು ಕೊಡುವಿರಾ? ಅಥವಾ ಕೊಡುವುದಿಲ್ಲವೇ? ನಿಮ್ಮ
ಉತ್ತರಕ್ಕನುಸಾರವಾಗಿ ನಾನು ಮುಂದಿನ ಕಾರ್ಯದ
ಬಗ್ಗೆ ಆಲೋಚಿಸುವೆ'' ಎಂದು ಹೇಳಿದನು.
50ಅದಕ್ಕೆ ಲಾಬಾನನು ಮತ್ತು ಬೆತೂವೇಲನು,
''ನಿನ್ನನ್ನು ಯೆಹೋವನೇ ಕಳುಹಿಸಿದ್ದಾನೆ. ನಡೆಯ
ತಕ್ಕದ್ದನ್ನು ಬದಲಾಯಿಸಲು ನಮಗೆ ಸಾಧ್ಯವಿಲ್ಲ.
51ರೆಬೆಕ್ಕಳು ನಿಮ್ಮವಳು. ನೀನು ಆಕೆಯನ್ನು ಕರೆದು
ಕೊಂಡು ಹೋಗಿ ಯೆಹೋವನ ಇಷ್ಟಕ್ಕನುಸಾರವಾಗಿ
ನಿನ್ನ ಒಡೆಯನ ಮಗನಿಗೆ ಮದುವೆ ಮಾಡಿಸು'' ಎಂದು
ಹೇಳಿದರು.
52ಅಬ್ರಹಾಮನ ಸೇವಕನು ಈ ಮಾತುಗಳನ್ನು ಕೇಳಿ
ಯೆಹೋವನಿಗೆ ನೆಲದವರೆಗೂ ತಲೆಬಾಗಿ ನಮಸ್ಕರಿಸಿ
ದನು. 53ಆಮೇಲೆ ಆ ಸೇವಕನು ತಾನು ತಂದಿದ್ದ ಉಡು
ಗೊರೆಗಳನ್ನು ರೆಬೆಕ್ಕಳಿಗೆ ಕೊಟ್ಟನು. ಅವನು ರೆಬೆಕ್ಕಳಿಗೆ
ಬೆಳ್ಳಿಬಂಗಾರಗಳ ಒಡವೆಗಳನ್ನೂ ಶ್ರೇಷ್ಠವಾದ ಬಟ್ಟೆ
ಗಳನ್ನೂ ಕೊಟ್ಟನು. ಇದಲ್ಲದೆ ಅವನು ಬೆಲೆಬಾಳುವ
ಉಡುಗೊರೆಗಳನ್ನು ಆಕೆಯ ಅಣ್ಣನಿಗೂ ತಾಯಿಗೂ
ಕೊಟ್ಟನು. 54ಆ ಸೇವಕನು ಮತ್ತು ಅವನ ಸಂಗಡಿಗರು
ಅಲ್ಲಿ ಇಳಿದುಕೊಂಡು ಊಟ ಮಾಡಿದರು. ಅವರು
ಮರುದಿನ ಮುಂಜಾನೆ ಎದ್ದು, ''ಈಗ ನಾವು ನಮ್ಮ ಒಡೆ
ಯನ ಬಳಿಗೆ ಹೋಗುತ್ತೇವೆ'' ಎಂದು ಹೇಳಿದರು.
55ರೆಬೆಕ್ಕಳ ತಾಯಿ ಮತ್ತು ಅಣ್ಣನು ಅವರಿಗೆ, ''ರೆಬೆಕ್ಕಳು
ಸ್ವಲ್ಪ ದಿನಗಳವರೆಗೆ ನಮ್ಮ ಜೊತೆ ಇರಲಿ. ಹತ್ತು ದಿನಗಳ
ವರೆಗಾದರೂ ನಮ್ಮೊಡನೆ ಇರಲಿ. ಆಮೇಲೆ ಆಕೆಯನ್ನು
ಕರೆದುಕೊಂಡು ಹೋಗು'' ಎಂದು ಹೇಳಿದರು.
56ಆದರೆ ಆ ಸೇವಕನು ಅವರಿಗೆ, ''ನನ್ನನ್ನು ತಡೆಯ
ಬೇಡಿ. ಯೆಹೋವನು ನನ್ನ ಪ್ರಯಾಣವನ್ನು ಯಶಸ್ವಿ
ಗೊಳಿಸಿದ್ದಾನೆ. ಈಗ ನನ್ನನ್ನು ನನ್ನ ಒಡೆಯನ ಬಳಿಗೆ
ಕಳುಹಿಸಿಕೊಡಿ'' ಎಂದು ಹೇಳಿದನು.
57ರೆಬೆಕ್ಕಳ ಅಣ್ಣ ಮತ್ತು ತಾಯಿ ಅವನಿಗೆ, ''ನಾವು
ರೆಬೆಕ್ಕಳನ್ನು ಕರೆದು ಆಕೆಯ ಇಷ್ಟವನ್ನು ಕೇಳುತ್ತೇವೆ''
ಅಂದರು. 58ಅವರು ರೆಬೆಕ್ಕಳನ್ನು ಕರೆದು, ''ಈಗಲೇ ಈ
ಮನುಷ್ಯನೊಡನೆ ಹೋಗಲು ನಿನಗೆ ಇಷ್ಟವಿದೆಯೊ?''
ಎಂದು ಕೇಳಿದರು.
ರೆಬೆಕ್ಕಳು, 'ಹೌದು, ನಾನು ಹೋಗುತ್ತೇನೆ' ಅಂದಳು.
59ಆದ್ದರಿಂದ ಅವರು ರೆಬೆಕ್ಕಳನ್ನು ಅಬ್ರಹಾಮನ
ಸೇವಕನೊಂದಿಗೂ ಅವನ ಸಂಗಡಿಗರೊಂದಿಗೂ ಕಳು
ಹಿಸಿಕೊಟ್ಟರು. ರೆಬೆಕ್ಕಳ ಸೇವಕಿ ಸಹ ಅವರೊಂದಿಗೆ
ಹೋದಳು.
60ಅವರು ಹೊರಡಲು ಸಿದ್ಧರಾಗಿದ್ದಾಗ ಅವರು
ರೆಬೆಕ್ಕಳಿಗೆ,
''ನಮ್ಮ ತಂಗಿಯೇ, ನೀನು ಕೋಟ್ಯಾನುಕೋಟಿ ಜನರ
ತಾಯಿಯಾಗು. ನಿನ್ನ ಸಂತತಿಗಳವರು ತಮ್ಮ ಶತ್ರುಗಳನ್ನು
ಸೋಲಿಸಿ ಅವರ ನಗರಗಳನ್ನು ವಶಮಾಡಿಕೊಳ್ಳಲಿ''
ಎಂದು ಹೇಳಿದರು.
61ಆಮೇಲೆ ರೆಬೆಕ್ಕಳು ಮತ್ತು ಆಕೆಯ ಸೇವಕಿಯರು
ಒಂಟೆಯ ಮೇಲೆ ಹತ್ತಿ ಕುಳಿತುಕೊಂಡು ಆ ಸೇವಕನನ್ನೂ
ಅವನ ಸಂಗಡಿಗರನ್ನೂ ಹಿಂಬಾಲಿಸಿದರು. ಹೀಗೆ ಆ
ಸೇವಕನು ರೆಬೆಕ್ಕಳನ್ನು ಕರೆದುಕೊಂಡು ಮನೆಗೆ ಮರಳಿ
ಪ್ರಮಾಣ ಮಾಡಿದನು.
62ಆ ಸಮಯದಲ್ಲಿ, ಇಸಾಕನು ಬೀರ್ ಲಹೈರೋಯಿಗೆ
ಹೋಗಿ ಬಂದಿದ್ದನು; ಯಾಕಂದರೆ ಅವನು ನೆಗೆವ್‌ನಲ್ಲಿ
ವಾಸವಾಗಿದ್ದನು. 63ಸಾಯಂಕಾಲದಲ್ಲಿ ಇಸಾಕನು
ಧ್ಯಾನಮಾಡಲು ಹೊಲಕ್ಕೆ ಹೋದನು. ಇಸಾಕನು ಕಣ್ಣೆತ್ತಿ
ನೋಡಿದಾಗ ಬಹುದೂರದಲ್ಲಿ ಒಂಟೆಗಳು ಬರುತ್ತಿರು
ವುದನ್ನು ಕಂಡನು.
64ರೆಬೆಕ್ಕಳು ಕಣ್ಣೆತ್ತಿ ನೋಡಿದಾಗ ಇಸಾಕನನ್ನು
ಕಂಡಳು. ಆಮೇಲೆ ಆಕೆ ಒಂಟೆಯಿಂದ ಬೇಗನೆ ಇಳಿದು
ಬಂದಳು. 65ಆಕೆ, ಆ ಸೇವಕನಿಗೆ, ''ನಮ್ಮನ್ನು ಭೇಟಿ
ಯಾಗಲು ಹೊಲದಲ್ಲಿ ಬರುತ್ತಿರುವ ಆ ಯೌವನಸ್ಥನು
ಯಾರು?'' ಎಂದು ಕೇಳಿದಳು.

ಆ ಸೇವಕನು, ‘‘ಅವನು ನನ್ನ ಒಡೆಯನ ಮಗನು’’
ಎಂದು ಹೇಳಿದನು. ಆ ಕೂಡಲೇ ರೆಬೆಕ್ಕಳು ತನ್ನ ಮುಖಕ್ಕೆ
ಮುಸುಕನ್ನು ಹಾಕಿಕೊಂಡಳು.
[66]ಆ ಸೇವಕನು ನಡೆದ ಸಂಗತಿಯನ್ನೆಲ್ಲಾ ಇಸಾಕನಿಗೆ
ತಿಳಿಸಿದನು. [67]ನಂತರ ಇಸಾಕನು ಆಕೆಯನ್ನು ಕರೆದು
ಕೊಂಡು ತನ್ನ ತಾಯಿಯ ಗುಡಾರಕ್ಕೆ ಬಂದನು. ಅಂದು
ರೆಬೆಕ್ಕಳು ಇಸಾಕನ ಹೆಂಡತಿಯಾದಳು. ಇಸಾಕನು ಅವ
ಳನ್ನು ಬಹಳವಾಗಿ ಪ್ರೀತಿಸಿದನು. ತಾಯಿಯ ಸಾವಿನಿಂದ
ಉಂಟಾಗಿದ್ದ ದುಃಖವು ಕಡಿಮೆಯಾಗಿ ಇಸಾಕನಿಗೆ
ಆಧರಣೆಯಾಯಿತು.

## ಅಬ್ರಹಾಮನ ಕುಟುಂಬ

25 ಅಬ್ರಹಾಮನು ಮತ್ತೆ ಮದುವೆಯಾದನು.
ಅವನ ಹೊಸ ಹೆಂಡತಿಯ ಹೆಸರು ಕೆಟೂರ.
[2]ಕೆಟೂರಳು, ಬಿಮ್ರಾನ್, ಯೊಕ್ಷಾನ್, ಮೆದಾನ್,
ಮಿದ್ಯಾನ್, ಇಷ್ಬಾಕ್, ಶೂಹ ಎಂಬವರನ್ನು ಹೆತ್ತಳು.
[3]ಯೊಕ್ಷಾನನು ಶೆಬಾ ಮತ್ತು ದೆದಾನ್ ಎಂಬವರ ತಂದೆ.
ದೆದಾನನ ಸಂತತಿಗಳವರು: ಅಶ್ಶೂರ್ಯರು ಲೆಟೂಶ್ಯರು
ಮತ್ತು ಲೆಯುಮ್ಯರು. [4]ಮಿದ್ಯಾನನ ಗಂಡುಮಕ್ಕಳು:
ಗೇಫಾ, ಗೇಫೆರ್, ನೋಕ್, ಅಬೀದಾ ಮತ್ತು ಎಲ್ದಾಗ.
ಇವರೆಲ್ಲರೂ ಕೆಟೂರಳ ಸಂತತಿಯವರು. [5-6]ಅಬ್ರಹಾ
ಮನು ಸಾಯುವುದಕ್ಕಿಂತ ಮುಂಚೆ ತನ್ನ ದಾಸಿಯ ಗಂಡು
ಮಕ್ಕಳಿಗೆ ಕೆಲವು ಉಡುಗೊರೆಗಳನ್ನು ಕೊಟ್ಟನು.
ಅಬ್ರಹಾಮನು ಆ ಗಂಡುಮಕ್ಕಳನ್ನು ಪೂರ್ವದ ಕಡೆಯ
ಲ್ಲಿದ್ದ ದೇಶಕ್ಕೆ ಕಳುಹಿಸಿ ಅವರನ್ನು ಇಸಾಕನಿಂದ ದೂರ
ಮಾಡಿದನು; ಬಳಿಕ ತನ್ನ ಆಸ್ತಿಯನ್ನೆಲ್ಲ ಇಸಾಕನಿಗೆ
ಕೊಟ್ಟನು.
[7]ಅಬ್ರಹಾಮನು ನೂರೆಪ್ಪತ್ತೈದು ವರ್ಷ ಜೀವಿಸಿದನು.
[8]ಅವನು ಪೂರ್ಣಾಯುಷ್ಯದಿಂದ ದಿನತುಂಬಿದ ವೃದ್ಧ
ನಾಗಿ ಪ್ರಾಣಬಿಟ್ಟು ತನ್ನ ಪಿತೃಗಳ ಬಳಿಗೆ ಸೇರಿದನು.
[9]ಅವನ ಗಂಡುಮಕ್ಕಳಾದ ಇಸಾಕ ಮತ್ತು ಇಷ್ಮಾಯೇಲರು
ಅವನನ್ನು ಮಕ್ಪೇಲದ ಗವಿಯಲ್ಲಿ ಸಮಾಧಿ ಮಾಡಿದರು.
ಈ ಗವಿಯು ಹಿತ್ತಿಯನಾದ ಚೋಹರನ ಮಗ
ಎಫ್ರೋನನ ಜಮೀನಿನಲ್ಲಿದೆ. ಅದು ಮಮ್ರೆಗೆ ಪೂರ್ವ
ದಿಕ್ಕಿನಲ್ಲಿದೆ. [10]ಅಬ್ರಹಾಮನು ಹಿತ್ತಿಯರಿಂದ ಕೊಂಡು
ಕೊಂಡ ಈ ಗವಿಯಲ್ಲೇ ಅಬ್ರಹಾಮನನ್ನು ಅವನ ಹೆಂಡತಿ
ಯಾದ ಸಾರಳ ಜೊತೆಯಲ್ಲಿ ಸಮಾಧಿ ಮಾಡಲಾಯಿತು.
[11]ಅಬ್ರಹಾಮನು ತೀರಿಕೊಂಡ ಮೇಲೆ, ದೇವರು ಇಸಾಕ
ನನ್ನು ಆಶೀರ್ವದಿಸಿದನು; ಇಸಾಕನು ಬೀರ್ಲಹೈ
ರೋಯಿಯಲ್ಲಿ ತನ್ನ ಜೀವನವನ್ನು ಮುಂದುವರೆಸಿದನು.
[12]ಇದು ಇಷ್ಮಾಯೇಲನ ವಂಶಾವಳಿ: ಇಷ್ಮಾಯೇಲನು
ಅಬ್ರಹಾಮನ ಮತ್ತು ಹಾಗರಳ ಮಗನು. (ಈಜಿಪ್ಟಿ
ನವಳಾದ ಹಾಗರಳು ಸಾರಳ ಸೇವಕಿ.) [13]ಇಷ್ಮಾಯೇಲನ
ಗಂಡುಮಕ್ಕಳ ಹೆಸರುಗಳು: ಮೊದಲನೆ ಮಗನು
ನೆಬಾಯೋತ್. ಆಮೇಲೆ ಹುಟ್ಟಿದವರು: ಕೇದಾರ್,
ಅದ್ಬಯೇಲ್, ಮಿಬ್ಸಾಮ್, [14]ಮಿಷ್ಮಾ, ದೂಮಾ,
ಮಸ್ಸಾ, [15]ಹದದ್, ತೇಮಾ, ಯಟೂರ್, ನಾಫೀಷ್;
ಮತ್ತು ಕೇದ್ಮಾ. [16]ಪ್ರತಿಯೊಬ್ಬನೂ ತನ್ನದೇ ಆದ ಪಾಳೆಯ
ವನ್ನು ಹೊಂದಿದ್ದನು. ಆ ಪಾಳೆಯಗಳೇ ಮುಂದೆ ಚಿಕ್ಕ
ಪಟ್ಟಣಗಳಾದವು. ಈ ಹನ್ನೆರಡು ಮಂದಿ ಗಂಡು ಮಕ್ಕಳು
ತಮ್ಮ ಜನರಿಗೆ ಹನ್ನೆರಡು ಮಂದಿ ರಾಜರುಗಳಂತಿದ್ದರು.
[17]ಇಷ್ಮಾಯೇಲನು ನೂರ ಮೂವತ್ತೇಳು ವರ್ಷ ಬದುಕಿ
ದನು. ಅವನು ಸತ್ತನಂತರ ಅವನನ್ನು ತನ್ನ ಪೂರ್ವಜರ
ಸಮಾಧಿಯಲ್ಲಿ ಹೂಣಿಟ್ಟರು. [18]ಇಷ್ಮಾಯೇಲನ ಸಂತತಿ
ಗಳವರು ಮರುಭೂಮಿ ಪ್ರದೇಶದ ಉದ್ದಕ್ಕೂ ಪಾಳೆಯ
ಗಳನ್ನು ಮಾಡಿಕೊಂಡಿದ್ದರು. ಈ ಪ್ರದೇಶವು ಹವೀಲ
ಮತ್ತು ಈಜಿಪ್ಟಿನ ಸಮೀಪದಲ್ಲಿರುವ ಶೂರಿನಿಂದ ಆರಂಭ
ಗೊಂಡು ಅಶ್ಶೂರ್ಯದವರೆಗೂ ಇತ್ತು. ಇಷ್ಮಾಯೇಲನ
ಸಂತತಿಗಳವರು ಪದೇಪದೇ ತಮ್ಮ ಸಹೋದರನ ಜನರಿಗೆ
ವಿರೋಧವಾಗಿ ಆಕ್ರಮಣಮಾಡುತ್ತಿದ್ದರು.

## ಇಸಾಕನ ಕುಟುಂಬ

[19]ಇದು ಇಸಾಕನ ಚರಿತ್ರೆ. ಅಬ್ರಹಾಮನಿಗೆ ಇಸಾಕ
ಎಂಬ ಹೆಸರಿನ ಮಗನಿದ್ದನು. [20]ಇಸಾಕನು ನಲವತ್ತು
ವರ್ಷದವನಾಗಿದ್ದಾಗ ರೆಬೆಕ್ಕಳನ್ನು ಮದುವೆಯಾದನು.
ರೆಬೆಕ್ಕಳು ಪದ್ದನ್ ಅರಾಮಿನವಳು. ಆಕೆ ಬೆತೂವೇಲನ
ಮಗಳು ಮತ್ತು ಅರಾಮ್ಯನಾದ ಲಾಬಾನನ ತಂಗಿ,
[21]ಇಸಾಕನ ಹೆಂಡತಿ ಮಕ್ಕಳನ್ನು ಪಡೆಯಲಾಗಲಿಲ್ಲ. ಆದ್ದ
ರಿಂದ ಇಸಾಕನು ತನ್ನ ಹೆಂಡತಿಗೋಸ್ಕರ ಯೆಹೋವನಲ್ಲಿ
ಪ್ರಾರ್ಥಿಸಿದನು. ಯೆಹೋವನು ಇಸಾಕನ ಪ್ರಾರ್ಥನೆ
ಯನ್ನು ಕೇಳಿ ರೆಬೆಕ್ಕಳಿಗೆ ಗರ್ಭಧಾರಣೆಯನ್ನು ಅನು
ಗ್ರಹಿಸಿದನು.
[22]ರೆಬೆಕ್ಕಳು ಗರ್ಭಿಣಿಯಾಗಿದ್ದಾಗ, ಅವಳ ಗರ್ಭದ
ಲ್ಲಿದ್ದ ಕೂಸುಗಳು ಒಂದನ್ನೊಂದು ನೂಕಾಡಿದ್ದರಿಂದ
ಅವಳು ಬಹಳ ತೊಂದರೆ ಪಡಬೇಕಾಯಿತು. ರೆಬೆಕ್ಕಳು
ಯೆಹೋವನಿಗೆ ಪ್ರಾರ್ಥಿಸಿ, ‘‘ನನಗೇಕೆ ಹೀಗೆ ಆಗು
ತ್ತಿದೆ?’’ ಎಂದು ಕೇಳಿದಳು. [23]ಯೆಹೋವನು ಅವಳಿಗೆ,
‘‘ನಿನ್ನ ಗರ್ಭದಲ್ಲಿ ಎರಡು ಜನಾಂಗಗಳಿವೆ. ಎರಡು
ಕುಟುಂಬಗಳನ್ನು ಆಳುವವರು ನಿನ್ನಲ್ಲಿ ಹುಟ್ಟುವರು;
ಅವರು ವಿಭಾಗವಾಗುವರು. ಒಬ್ಬ ಮಗನು ಮತ್ತೊಬ್ಬನಿ
ಗಿಂತ ಬಲಶಾಲಿಯಾಗಿರುವನು. ದೊಡ್ಡ ಮಗನು ಚಿಕ್ಕ
ಮಗನ ಸೇವೆ ಮಾಡುವನು’’ ಎಂದು ಹೇಳಿದನು. [24]ದಿನ
ತುಂಬಿದ ಮೇಲೆ ರೆಬೆಕ್ಕಳು ಅವಳಜವಳಿ ಮಕ್ಕಳನ್ನು
ಹೆತ್ತಳು. [25]ಮೊದಲನೆಯ ಮಗುವು ಕೆಂಪಗಿತ್ತು. ಅವನ

ಚರ್ಮವು ಕೂದಲಿನ ಉಡುಪಿನಂತಿತ್ತು. ಆದ್ದರಿಂದ ಅವ
ನಿಗೆ ''ಏಸಾವ್''* ಎಂದು ಹೆಸರಿಡಲಾಯಿತು. 26ಎರಡ
ನೆಯ ಮಗು ಹುಟ್ಟಿದಾಗ ಅದು ಏಸಾವನ ಹಿಮ್ಮಡಿಯನ್ನು
ಗಟ್ಟಿಯಾಗಿ ಹಿಡಿದುಕೊಂಡಿತ್ತು. ಆದ್ದರಿಂದ ಆ ಮಗುವಿಗೆ
''ಯಾಕೋಬ''* ಎಂದು ಹೆಸರಿಡಲಾಯಿತು.
ಯಾಕೋಬ ಮತ್ತು ಏಸಾವ ಹುಟ್ಟಿದಾಗ ಇಸಾಕನಿಗೆ
ಅರವತ್ತು ವರ್ಷ ವಯಸ್ಸಾಗಿತ್ತು.

27ಆ ಬಾಲಕರು ಬೆಳೆದು ದೊಡ್ಡವರಾದರು. ಏಸಾವನು
ಚತುರನಾದ ಬೇಟೆಗಾರನಾದನು. ಹೊಲದಲ್ಲಿರುವುದು
ಅವನಿಗೆ ಪ್ರಿಯವಾಗಿತ್ತು. ಆದರೆ ಯಾಕೋಬನು ಸಾಧು
ಮನುಷ್ಯನಾಗಿದ್ದನು. ಅವನು ತನ್ನ ಗುಡಾರದಲ್ಲಿರುತ್ತಿ
ದ್ದನು. 28ಇಸಾಕನು ಏಸಾವನನ್ನು ಪ್ರೀತಿಸಿದನು.
ಏಸಾವನು ಬೇಟೆಯಾಡಿ ತಂದ ಪ್ರಾಣಿಗಳ ಮಾಂಸ ಅವ
ನಿಗೆ ಇಷ್ಟವಾಗಿತ್ತು. ಆದರೆ ರೆಬೆಕ್ಕಳು ಯಾಕೋಬನನ್ನು
ಪ್ರೀತಿಸಿದಳು.

29ಒಂದುಸಲ ಏಸಾವನು ಬೇಟೆಯಿಂದ ಹಿಂತಿರುಗಿ
ಬಂದಾಗ ಹಸಿವೆಯಿಂದ ಸುಸ್ತಾಗಿದ್ದನು ಮತ್ತು ಬಲಹೀನ
ನಾಗಿದ್ದನು. ಯಾಕೋಬನು ಅಲಸಂಧಿ ಗುಗ್ಗರಿ ಮಾಡು
ತ್ತಿದ್ದನು. 30ಆಗ ಏಸಾವನು ಯಾಕೋಬನಿಗೆ, ''ಹಸಿವೆ
ಯಿಂದ ನನಗೆ ಸುಸ್ತಾಗಿದೆ. ನನಗೆ ಕೆಂಪಾದ ಸ್ವಲ್ಪ ಅಲ
ಸಂದಿ ಗುಗ್ಗರಿಯನ್ನು ಕೊಡು'' ಎಂದು ಕೇಳಿದನು. (ಈ
ಕಾರಣದಿಂದ ಜನರು ಅವನಿಗೆ ''ಏದೋಮ್''*
ಎಂದು ಕರೆಯುತ್ತಾರೆ.)

31ಆದರೆ ಯಾಕೋಬನು, ''ನಿನ್ನ ಚೊಚ್ಚಲುತನದ
ಹಕ್ಕನ್ನು ನೀನು ನನಗೆ ಈ ದಿನ ಮಾರಬೇಕು'' ಎಂದು
ಹೇಳಿದನು.

32ಏಸಾವನು, ''ನನಗೆ ಹಸಿವೆಯಿಂದ ಸಾಯುವಂತಾ
ಗಿದೆ. ನಾನು ಸತ್ತು ಹೋದರೆ, ನನ್ನ ತಂದೆಯ ಐಶ್ವರ್ಯ
ವೆಲ್ಲ ನನಗೆ ಸಹಾಯ ಮಾಡಲಾರದು. ಆದ್ದರಿಂದ ನಾನು
ನನ್ನ ಹಕ್ಕನ್ನು ನಿನಗೆ ಕೊಡುವೆನು'' ಎಂದು ಹೇಳಿದನು.

33ಆದರೆ ಯಾಕೋಬನು, ''ನೀನು ಅದನ್ನು ಕೊಡುವು
ದಾಗಿ ಪ್ರಮಾಣಮಾಡು'' ಅಂದನು. ಆದ್ದರಿಂದ
ಏಸಾವನು ಯಾಕೋಬನಿಗೆ ಪ್ರಮಾಣ ಮಾಡಿದನು.
ಹೀಗೆ ಏಸಾವನು ತನ್ನ ಚೊಚ್ಚಲುತನದ ಹಕ್ಕನ್ನು
ಯಾಕೋಬನಿಗೆ ಮಾರಿಕೊಂಡನು. 34ಆಗ
ಯಾಕೋಬನು ಏಸಾವನಿಗೆ ರೊಟ್ಟಿಯನ್ನೂ ಕುದಿಸಿದ
ಅಲಸಂಧಿಕಾಳನ್ನು ಕೊಟ್ಟನು. ಏಸಾವನು ತಿಂದು ಕುಡಿದು
ಅಲ್ಲಿಂದ ಹೊರಟುಹೋದನು. ಹೀಗೆ ಏಸಾವನು ತನ್ನ
ಚೊಚ್ಚಲುತನದ ಹಕ್ಕುಗಳ ಮೇಲೆ ತನಗೆ ಚಿಂತೆ
ಯಿಲ್ಲದಿರುವುದನ್ನು ತೋರಿಸಿಕೊಂಡನು.

### ಇಸಾಕನು ಅಬೀಮೆಲೆಕನಿಗೆ ಸುಳ್ಳು ಹೇಳಿದ್ದು

26 ಅಬ್ರಹಾಮನ ಕಾಲದಲ್ಲಿ ಬಂದಿದ್ದ ಕ್ಷಾಮ
ದಂತೆ ಮತ್ತೊಂದು ಕ್ಷಾಮವು ಕಾನಾನ್ ದೇಶಕ್ಕೆ
ಬಂದಿತು. ಆದ್ದರಿಂದ ಇಸಾಕನು ಫಿಲಿಷ್ಟಿಯರ ರಾಜನಾದ
ಅಬೀಮೆಲೆಕನ ಬಳಿಗೆ ಹೋದನು. ಅಬೀಮೆಲೆಕನು
ಗೆರಾರ್ ನಗರದಲ್ಲಿದ್ದನು.

2ಯೆಹೋವನು ಇಸಾಕನಿಗೆ ಪ್ರತ್ಯಕ್ಷನಾಗಿ, ''ನೀನು
ಈಜಿಪ್ಟಿಗೆ ಹೋಗಬೇಡ. ನೀನು ಯಾವ ಪ್ರದೇಶದಲ್ಲಿರ
ಬೇಕೆಂದು ನಾನು ಆಜ್ಞಾಪಿಸಿದೆನೋ ಆ ಪ್ರದೇಶದಲ್ಲಿ
ವಾಸಿಸು. 3ನಾನು ನಿನ್ನ ಸಂಗಡವಿದ್ದು ನಿನ್ನನ್ನು ಆಶೀರ್ವ
ದಿಸಿ ನಿನಗೂ ನಿನ್ನ ಕುಟುಂಬಕ್ಕೂ ಈ ಪ್ರದೇಶಗಳನ್ನೆಲ್ಲ
ಕೊಡುವೆನು. ನಾನು ನಿನ್ನ ತಂದೆಯಾದ ಅಬ್ರಹಾಮನಿಗೆ
ಪ್ರಮಾಣ ಮಾಡಿದ್ದನ್ನು ನೆರವೇರಿಸುವೆನು. 4ನಾನು ನಿನ್ನ
ಸಂತಾನವನ್ನು ಆಕಾಶದಲ್ಲಿನ ನಕ್ಷತ್ರಗಳಷ್ಟು ಹೆಚ್ಚಿಸಿ ಅವ
ರಿಗೆ ಈ ಪ್ರದೇಶಗಳನ್ನೆಲ್ಲಾ ಕೊಡುವೆನು. ಭೂಮಿಯ
ಮೇಲಿರುವ ಎಲ್ಲಾ ಜನಾಂಗಗಳವರು ನಿನ್ನ ಸಂತತಿಯಿಂದ
ಆಶೀರ್ವಾದ ಹೊಂದುವರು. 5ನಾನೇ ಇದನ್ನು ನೆರವೇರಿ
ಸುವೆನು; ಯಾಕಂದರೆ ನಿನ್ನ ತಂದೆಯಾದ ಅಬ್ರಹಾಮನು
ನನ್ನ ಮಾತುಗಳಿಗೆ ವಿಧೇಯನಾಗಿ ನಾನು ಹೇಳಿದಂತೆ
ಮಾಡಿ ನನ್ನ ಆಜ್ಞೆಗಳನ್ನು, ಕಟ್ಟಳೆಗಳನ್ನು ಮತ್ತು ನಿಯಮ
ಗಳನ್ನು ಕೈಕೊಂಡು ನಡೆದನು'' ಎಂದು ಹೇಳಿದನು.

6ಆದ್ದರಿಂದ ಇಸಾಕನು ಗೆರಾರಿನಲ್ಲಿ ಇಳಿದುಕೊಂಡು
ವಾಸಿಸಿದನು. 7ಇಸಾಕನ ಹೆಂಡತಿಯಾದ ರೆಬೆಕ್ಕಳು ತುಂಬ
ಸೌಂದರ್ಯವತಿಯಾಗಿದ್ದಳು. ಆ ಸ್ಥಳದ ಗಂಡಸರು
ರೆಬೆಕ್ಕಳ ಬಗ್ಗೆ ಇಸಾಕನ್ನು ಕೇಳಿದರು. ಇಸಾಕನು ಅವರಿಗೆ,
''ಆಕೆ ನನ್ನ ತಂಗಿ'' ಎಂದು ಹೇಳಿದನು. ರೆಬೆಕ್ಕಳು ತನಗೆ
ಹೆಂಡತಿಯಾಗಬೇಕೆಂದು ಅವರಿಗೆ ತಿಳಿದರೆ ಆಕೆಯನ್ನು
ತೆಗೆದುಕೊಳ್ಳಲು ಅವರು ತನ್ನನ್ನು ಕೊಲ್ಲಬಹುದೆಂಬ
ಹೆದರಿಕೆಯಿಂದ ಇಸಾಕನು ಹಾಗೆ ಹೇಳಿದನು.

8ಅಲ್ಲಿ ಇಸಾಕನು ಇದ್ದು ಬಹುಕಾಲವಾಗಿತ್ತು. ಒಮ್ಮೆ
ಫಿಲಿಷ್ಟಿಯರ ರಾಜನಾದ ಅಬೀಮೆಲೆಕನು ತನ್ನ ಕಿಟಕಿ
ಯಿಂದ ನೋಡಿದಾಗ, ಇಸಾಕನು ಮತ್ತು ಅವನ ಹೆಂಡತಿ
ಸರಸವಾಡುತ್ತಿರುವುದನ್ನು ಕಂಡನು. 9ಅಬೀಮೆಲೆಕನು
ಇಸಾಕನನ್ನು ಕರೆದು, ''ಈ ಸ್ತ್ರೀಯು ನಿನ್ನ ಹೆಂಡತಿ. ಅವಳು
ನಿನ್ನ ತಂಗಿಯೆಂದು ಯಾಕೆ ನಮಗೆ ಹೇಳಿದೆ?'' ಎಂದು
ಕೇಳಿದನು.

ಇಸಾಕನು ಅವನಿಗೆ, ''ನೀನು ಆಕೆಯನ್ನು ತೆಗೆದು
ಕೊಳ್ಳಲು ನನ್ನನ್ನು ಕೊಲ್ಲಬಹುದೆಂಬ ಭಯದಿಂದ ಹಾಗೆ
ಹೇಳಿದೆ'' ಅಂದನು. 10ಅಬೀಮೆಲೆಕನು ಅವನಿಗೆ,

---

**ಏಸಾವ್** ಈ ಪದದ ಅರ್ಥ: ''ಕೂದಲುಳ್ಳವನು.''

**ಯಾಕೋಬ** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ: ''ಹಿಮ್ಮಡಿ.'' ''ಹಿಂಬಾಲಿಸುವವನು'' ಅಥವಾ ''ಮೋಸಗಾರ.''

**ಏದೋಮ್** ಈ ಹೆಸರಿನ ಅರ್ಥ: ''ಕೆಂಪು.''

''ನೀನು ನಮಗೆ ಕೆಟ್ಟದ್ದನು ಮಾಡಿದೆ. ನಮ್ಮಲ್ಲಿರುವ ಯಾವ ಗಂಡಸಾದರೂ ನಿನ್ನ ಹೆಂಡತಿಯೊಡನೆ ಮಲಗಿ ಕೊಳ್ಳಲು ನೀನೇ ಆಸ್ಪದ ಮಾಡಿಕೊಟ್ಟಿದ್ದೆ. ಅಂಥದ್ದೇನಾದರೂ ನಡೆದಿದ್ದರೆ ಮಹಾಪರಾಧವಾಗುತ್ತಿತ್ತು'' ಎಂದು ಹೇಳಿದನು.

11ಬಳಿಕ ಅಬೀಮೆಲೆಕನು ತನ್ನ ಪ್ರಜೆಗಳಿಗೆ, ''ಈ
ಮನುಷ್ಯನಿಗಾಗಲೀ ಇವನ ಹೆಂಡತಿಗಾಗಲೀ ಯಾರೂ ಕೇಡುಮಾಡಕೂಡದು. ಇವರಿಗೆ ಕೇಡು ಮಾಡುವವ ನನ್ನು ಕೊಲ್ಲಲಾಗುವುದು'' ಎಂದು ಆಜ್ಞಾಪಿಸಿದನು.

### ಇಸಾಕನು ಐಶ್ವರ್ಯವಂತನಾದದ್ದು

12ಇಸಾಕನು ಆ ಪ್ರದೇಶದಲ್ಲಿ ಬೀಜಬಿತ್ತಿದನು; ಅವ
ನಿಗೆ ಅದೇ ವರ್ಷದಲ್ಲಿ ಮಹಾ ಸುಗ್ಗಿಯಾಯಿತು.
ಯೆಹೋವನು ಅವನನ್ನು ಹೆಚ್ಚಾಗಿ ಆಶೀರ್ವದಿಸಿದನು.
13ಅವನ ಐಶ್ವರ್ಯವು ಹೆಚ್ಚುತ್ತಾ ಬಂದದ್ದರಿಂದ ಅವನು
ಬಹು ಐಶ್ವರ್ಯವಂತನಾದನು. 14ಅವನಿಗೆ ಅನೇಕ ದನ
ಕುರಿಗಳ ಮಂದೆಗಳೂ ಪ್ರಾಣಿಗಳ ಹಿಂಡೂಗಳೂ ಇದ್ದವು.
ಇದಲ್ಲದೆ ಅವನಿಗೆ ಅನೇಕ ಸೇವಕರು ಇದ್ದರು. ಇದನ್ನು
ಕಂಡು ಫಿಲಿಷ್ಟಿಯರು ಅವನ ಬಗ್ಗೆ ಅಸೂಯೆ ಪಡು
ತ್ತಿದ್ದರು. 15ಆದ್ದರಿಂದ ಅನೇಕ ವರ್ಷಗಳ ಹಿಂದೆ
ಅಬ್ರಹಾಮ ಮತ್ತು ಅವನ ಸೇವಕರು ತೋಡಿದ್ದ ಬಾವಿಗ
ಳಿಗೆ ಫಿಲಿಷ್ಟಿಯರು ಮಣ್ಣುಹಾಕಿ ಮುಚ್ಚಿದರು.
16ಅಬೀಮೆಲೆಕನು ಇಸಾಕನಿಗೆ, ''ನಮ್ಮ ದೇಶವನ್ನು ಬಿಟ್ಟು
ಹೋಗು. ನೀನು ನಮಗಿಂತಲೂ ತುಂಬ ಬಲಿಷ್ಠನಾದೆ''
ಎಂದು ಹೇಳಿದನು.

17ಆದ್ದರಿಂದ ಇಸಾಕನು ಆ ಸ್ಥಳದಿಂದ ಹೊರಟು
ಗೆರಾರಿನ ಚಿಕ್ಕಹೊಳೆಯ ಸಮೀಪದಲ್ಲಿ ಪಾಳೆಯ ಮಾಡಿ
ಕೊಂಡನು. ಇಸಾಕನು ಅಲ್ಲಿ ಇಳಿದುಕೊಂಡು ವಾಸಿಸಿ
ದನು. 18ಇದಕ್ಕೂ ಬಹುಕಾಲದ ಹಿಂದೆ, ಅಬ್ರಹಾಮನು
ಅನೇಕ ಬಾವಿಗಳನ್ನು ತೋಡಿಸಿದ್ದನು. ಅಬ್ರಹಾಮನು
ಸತ್ತು ಹೋದ ಮೇಲೆ, ಫಿಲಿಷ್ಟಿಯರು ಆ ಬಾವಿಗಳಿಗೆ
ಮಣ್ಣುಹಾಕಿ ಮುಚ್ಚಿದರು. ಇಸಾಕನು ಆ ಬಾವಿಗಳನ್ನು
ಮತ್ತೆ ತೋಡಿ, ತನ್ನ ತಂದೆ ಕೊಟ್ಟಿದ್ದ ಹೆಸರುಗಳನ್ನೇ ಅವು
ಗಳಿಗೆ ಕೊಟ್ಟನು. 19ಇಸಾಕನ ಸೇವಕರು ಚಿಕ್ಕ ಹೊಳೆಯ
ಸಮೀಪದಲ್ಲಿ ಒಂದು ಬಾವಿಯನ್ನು ತೋಡಿದರು. ಆ
ಬಾವಿಯಲ್ಲಿ ನೀರಿನ ಸೆಲೆ ಸಿಕ್ಕಿತು. 20ಆದರೆ ಗೆರಾರಿನ
ಕಣಿವೆಯಲ್ಲಿ ಕುರಿಕಾಯುತ್ತಿದ್ದ ಜನರು ಇಸಾಕನ ಸೇವಕ
ರೊಡನೆ ವಾದಮಾಡಿ, ''ಈ ನೀರು ನಮ್ಮದು'' ಎಂದು
ಹೇಳಿದರು. ಆದ್ದರಿಂದ ಇಸಾಕನು ಆ ಬಾವಿಗೆ 'ಏಸೆಕ್'
ಎಂದು ಹೆಸರಿಟ್ಟನು. 21ಆಮೇಲೆ ಇಸಾಕನ ಸೇವಕರು
ಮತ್ತೊಂದು ಬಾವಿಯನ್ನು ತೋಡಿದರು. ಅಲ್ಲಿಯ
ಜನರೂ ಆ ಬಾವಿಗಾಗಿ ವಾದ ಮಾಡಿದರು. ಆದ್ದರಿಂದ
ಇಸಾಕನು ಆ ಬಾವಿಗೆ 'ಸಿಟ್ನಾ' ಎಂದು ಹೆಸರಿಟ್ಟನು.

22ಇಸಾಕನು ಅಲ್ಲಿಂದ ಹೊರಟು ಮತ್ತೊಂದು
ಬಾವಿಯನ್ನು ತೋಡಿಸಿದನು. ಆ ಬಾವಿಯ ಕುರಿತು ವಾದ
ಮಾಡಲು ಯಾರೂ ಬರಲಿಲ್ಲ. ಆದ್ದರಿಂದ ಇಸಾಕನು,
''ಈಗ ಯೆಹೋವನು ನಮಗೋಸ್ಕರ ಒಂದು ಸ್ಥಳವನ್ನು
ತೋರಿಸಿದ್ದಾನೆ. ನಾವು ಈ ಸ್ಥಳದಲ್ಲಿ ಅಭಿವೃದ್ಧಿ
ಯಾಗೋಣ'' ಎಂದು ಹೇಳಿ ಆ ಬಾವಿಗೆ
'ರೆಹೋಬೋತ್' ಎಂದು ಹೆಸರಿಟ್ಟನು.

23ಇಸಾಕನು ಆ ಸ್ಥಳದಿಂದ ಬೇರ್ಷೆಬಕ್ಕೆ ಹೋದನು.
24ಆ ರಾತ್ರಿ ಯೆಹೋವನು ಇಸಾಕನಿಗೆ ಪ್ರತ್ಯಕ್ಷನಾಗಿ,
''ನಾನು ನಿನ್ನ ತಂದೆಯಾದ ಅಬ್ರಹಾಮನ ದೇವರು.
ಭಯಪಡಬೇಡ, ನಾನು ನಿನ್ನ ಸಂಗಡವಿದ್ದೇನೆ. ನಾನು
ನಿನ್ನನ್ನು ಆಶೀರ್ವದಿಸುವೆನು. ನಾನು ನಿನ್ನ ಕುಟುಂಬ
ವನ್ನು ಉನ್ನತಸ್ಥಿತಿಗೆ ತರುವೆನು. ನನ್ನ ಸೇವಕನಾದ
ಅಬ್ರಹಾಮನಿಗಾಗಿಯೇ ಇದನ್ನು ಮಾಡುತ್ತೇನೆ'' ಎಂದು
ಹೇಳಿದನು. 25ಆದ್ದರಿಂದ ಆ ಸ್ಥಳದಲ್ಲಿ ಇಸಾಕನು ಯಜ್ಞ
ವೇದಿಕೆಯನ್ನು ಕಟ್ಟಿ ಯೆಹೋವನನ್ನು ಆರಾಧಿಸಿದನು.
ಇಸಾಕನು ಆ ಸ್ಥಳದಲ್ಲಿ ಪಾಳೆಯಮಾಡಿಕೊಂಡನು; ಅವನ
ಸೇವಕರು ಅಲ್ಲಿ ಒಂದು ಬಾವಿಯನ್ನು ತೋಡಿದರು.

26ಅಬೀಮೆಲೆಕನು ಇಸಾಕನನ್ನು ಕಾಣಲು ಗೆರಾರಿ
ನಿಂದ ಬಂದನು. ಅಬೀಮೆಲೆಕನು ತನ್ನ ಸಲಹೆಗಾರನಾದ
ಅಹುಜ್ಜತನನ್ನು ಮತ್ತು ಸೇನಾಪತಿಯಾದ ಫೀಕೋಲ
ನನ್ನು ತನ್ನೊಡನೆ ಕರೆದುಕೊಂಡು ಬಂದಿದ್ದನು.

27ಇಸಾಕನು, ''ನೀನು ನನ್ನನ್ನು ನೋಡಲು ಬಂದ
ದ್ದೇಕೆ? ಮೊದಲು, ನೀನು ನನ್ನೊಡನೆ ಸ್ನೇಹದಿಂದ
ಇರಲಿಲ್ಲ. ಅಲ್ಲದೆ ನಿನ್ನ ದೇಶವನ್ನು ಬಿಟ್ಟುಹೋಗುವಂತೆ
ನೀನು ನನ್ನನ್ನು ಬಲವಂತ ಮಾಡಿದೆ'' ಎಂದು ಹೇಳಿದನು.

28ಅವರು ಅವನಿಗೆ, ''ನಿನ್ನ ಜೊತೆಯಲ್ಲಿ
ಯೆಹೋವನು ಇದ್ದಾನೆಂಬುದು ಈಗ ನಮಗೆ ತಿಳಿಯಿತು.
ನಾವು ಒಂದು ಒಪ್ಪಂದ ಮಾಡಿಕೊಳ್ಳಬೇಕೆಂಬುದು ನಮ್ಮ
ಆಲೋಚನೆ. ನೀನು ನಮಗೆ ಒಂದು ಪ್ರಮಾಣ ಮಾಡ
ಬೇಕಾಗಿದೆ. 29ನಾವು ನಿನಗೆ ಕೇಡು ಮಾಡಲಿಲ್ಲ. ಅದೇ
ರೀತಿಯಲ್ಲಿ ಈಗ ನೀನೂ ನಮಗೆ ಕೇಡು ಮಾಡುವುದಿಲ್ಲ
ವೆಂದು ಪ್ರಮಾಣಮಾಡಬೇಕು. ನಾವು ನಿನ್ನನ್ನು ದೂರ
ಕಳುಹಿಸಿದರೂ ಸಮಾಧಾನದಿಂದ ಕಳುಹಿಸಿಕೊಟ್ಟೆವು.
ಯೆಹೋವನು ನಿನ್ನನ್ನು ಆಶೀರ್ವದಿಸಿದ್ದಾನೆ ಎಂಬುದು
ಈಗ ಸ್ಪಷ್ಟವಾಗಿದೆ'' ಎಂದು ಹೇಳಿದರು.

30ಆದ್ದರಿಂದ ಇಸಾಕನು ಅವರಿಗಾಗಿ ಒಂದು ಔತಣ
ವನ್ನು ಮಾಡಿಸಿದನು. ಅವರೆಲ್ಲರೂ ಸಮೃದ್ಧಿಯಾಗಿ ಊಟ
ಮಾಡಿದರು. 31ಮರುದಿನ ಮುಂಜಾನೆ, ಅವರು ಒಬ್ಬರಿ
ಗೊಬ್ಬರು ಪ್ರಮಾಣ ಮಾಡಿಕೊಂಡು, ಸಮಾಧಾನದಿಂದ

ಹೊರಟು ಹೋದರು. 32ಆ ದಿನ, ಇಸಾಕನ ಸೇವಕರು
ಬಂದು, ತಾವು ತೋಡಿದ್ದ ಬಾವಿಯ ಬಗ್ಗೆ ಹೇಳುತ್ತಾ
‘‘ಬಾವಿಯಲ್ಲಿ ನಮಗೆ ನೀರಿನ ಸೆಲೆ ಸಿಕ್ಕಿತು’’ ಎಂದು
ಹೇಳಿದರು. 33ಆದ್ದರಿಂದ ಇಸಾಕನು ಆ ಬಾವಿಗೆ ಷೀಬಾ *
ಎಂದು ಹೆಸರಿಟ್ಟನು. ಇಂದಿಗೂ ಆ ನಗರಕ್ಕೆ ಬೇರ್ಷೆಬ
ಎಂದು ಕರೆಯುತ್ತಾರೆ.

### ಏಸಾವನ ಹೆಂಡತಿಯರು

34ಏಸಾವನಿಗೆ ನಲವತ್ತು ವರ್ಷಗಳಾಗಿದ್ದಾಗ ಅವನು
ಹಿತ್ತಿಯರ ಇಬ್ಬರು ಸ್ತ್ರೀಯರನ್ನು ಮದುವೆ ಮಾಡಿ
ಕೊಂಡನು. ಒಬ್ಬಳು ಬೇರಿಯನ ಮಗಳಾದ ಯೆಹೂ
ದೀತಳು, ಮತ್ತೊಬ್ಬಳು ಏಲೋನನ ಮಗಳಾದ ಬಾಸೆ
ಮತಳು. 35ಈ ಮದುವೆಗಳಿಂದ ಇಸಾಕ ಮತ್ತು ರೆಬೆಕ್ಕಳಿಗೆ
ತುಂಬ ದುಃಖವಾಯಿತು.

### ಪಿತ್ರಾರ್ಜಿತ ಆಸ್ತಿಗಾಗಿ ಸಮಸ್ಯೆಗಳು

27 ಇಸಾಕನು ಮುದುಕನಾದಾಗ ಅವನಿಗೆ ಕಣ್ಣು
ಗಳು ಸ್ಪಷ್ಟವಾಗಿ ಕಾಣುತ್ತಿರಲಿಲ್ಲ. ಒಂದು ದಿನ
ಅವನು ತನ್ನ ಹಿರಿಮಗನಾದ ಏಸಾವನನ್ನು ತನ್ನ ಬಳಿಗೆ
ಕರೆದು ಅವನಿಗೆ, ‘‘ಮಗನೇ’’ ಅಂದನು.
ಏಸಾವನು, ‘‘ಇಗೋ ಇದ್ದೇನೆ’’ ಎಂದು ಉತ್ತರಿಸಿ
ದನು. 2ಇಸಾಕನು ಅವನಿಗೆ, ‘‘ನನಗೆ ವಯಸ್ಸಾಯಿತು.
ನಾನು ಬಹುಬೇಗನೆ ಸಾಯಬಹುದು. 3ಆದ್ದರಿಂದ ನಿನ್ನ
ಬಿಲ್ಲುಬಾಣಗಳನ್ನು ತೆಗೆದುಕೊಂಡು ಬೇಟೆಗೆ ಹೋಗು
ನನಗೋಸ್ಕರ ಒಂದು ಪ್ರಾಣಿಯನ್ನು ಬೇಟೆಯಾಡಿ
ಕೊಂಡು ಬಂದು4ನನಗೆ ಇಷ್ಟವಾದ ಅಡಿಗೆಯನ್ನು ತಯಾ
ರಿಸಿ ತೆಗೆದುಕೊಂಡು ಬಾ. ನಾನು ಸಾಯುವ ಮೊದಲೇ
ನಿನ್ನನ್ನು ಆಶೀರ್ವದಿಸುವೆನು’’ ಎಂದು ಹೇಳಿದನು. 5ಆದ್ದ
ರಿಂದ ಏಸಾವನು ಬೇಟೆಗಾಗಿ ಹೋದನು.

### ಯಾಕೋಬನು ಇಸಾಕನಿಗೆ ಮಾಡಿದ ಮೋಸ

ಇಸಾಕನು ತನ್ನ ಮಗನಾದ ಏಸಾವನಿಗೆ ಹೇಳಿದ ಈ
ವಿಷಯಗಳನ್ನೆಲ್ಲ ರೆಬೆಕ್ಕಳು ಕೇಳಿಸಿಕೊಂಡಳು. 6ರೆಬೆಕ್ಕಳು
ತನ್ನ ಮಗನಾದ ಯಾಕೋಬನಿಗೆ, ‘‘ಕೇಳು, ನಿನ್ನ
ತಂದೆಯು ನಿನ್ನ ಅಣ್ಣನಾದ ಏಸಾವನೊಡನೆ ಮಾತಾಡು
ತ್ತಿರುವುದನ್ನು ನಾನು ಕೇಳಿಸಿಕೊಂಡೆ. 7ನಿನ್ನ ತಂದೆ ಅವ
ನಿಗೆ, ‘ನನಗೋಸ್ಕರ ಒಂದು ಪ್ರಾಣಿಯನ್ನು ಬೇಟೆಯಾಡಿ
ಕೊಂಡು ಬಂದು ನನಗೆ ಇಷ್ಟವಾದ ಅಡಿಗೆಯನ್ನು ತಯಾ
ರಿಸಿ ತೆಗೆದುಕೊಂಡು ಬಾ. ನಾನು ಸಾಯುವ ಮೊದಲೇ
ನಿನ್ನನ್ನು ಆಶೀರ್ವದಿಸುವೆನು’ ಎಂದು ಹೇಳಿದನು. 8ಆದ್ದ
ರಿಂದ ಮಗನೇ, ನನ್ನ ಮಾತನ್ನು ಕೇಳು ಮತ್ತು ನಾನು
ಹೇಳಿದ್ದನ್ನು ಮಾಡು. 9ನಮ್ಮ ಆಡುಗಳ ಬಳಿಗೆ ಹೋಗಿ
ಎರಡು ಆಡು ಮರಿಗಳನ್ನು ತೆಗೆದುಕೊಂಡು ಬಾ. ನಿಮ್ಮ
ತಂದೆಗೆ ಇಷ್ಟವಾದ ಅಡಿಗೆಯನ್ನು ನಾನು ಅವುಗಳ ಮಾಂಸ
ದಿಂದ ಸಿದ್ಧಪಡಿಸುವೆ. 10ನೀನು ಆ ಅಡಿಗೆಯನ್ನು ನಿನ್ನ
ತಂದೆಗೆ ತೆಗೆದುಕೊಂಡು ಹೋಗು. ಆಗ ಅವನು ತಾನು
ಸಾಯುವ ಮೊದಲೇ ನಿನ್ನನ್ನು ಆಶೀರ್ವದಿಸುವನು’’
ಎಂದಳು.
11ಅದಕ್ಕೆ ಯಾಕೋಬನು ತನ್ನ ತಾಯಿಯಾದ ರೆಬೆಕ್ಕ
ಳಿಗೆ, ‘‘ನನ್ನ ಅಣ್ಣನಾದ ಏಸಾವನಿಗೆ ಮೈತುಂಬ ರೋಮ
ಗಳಿವೆ, ಆದರೆ ನನಗೆ ರೋಮಗಳಿಲ್ಲ. 12ನನ್ನ ತಂದೆ
ನನ್ನನ್ನು ಮುಟ್ಟಿದರೆ, ನಾನು ಏಸಾವನಲ್ಲವೆಂದು ತಿಳಿದು
ಕೊಳ್ಳುವನು. ಆಗ ಅವನು ನನ್ನನ್ನು ಆಶೀರ್ವದಿಸುವು
ದಿಲ್ಲ. ನಾನು ಅವನನ್ನು ಮೋಸಗೊಳಿಸಲು ಪ್ರಯತ್ನಿಸಿದ್ದ
ರಿಂದ ಅವನು ನನ್ನನ್ನು ಶಪಿಸುವನು’’ ಎಂದು ಹೇಳಿದನು.
13ಅದಕ್ಕೆ ರೆಬೆಕ್ಕಳು ಅವನಿಗೆ, ‘‘ಅವನು ನಿನಗೆ ಶಾಪ
ಕೊಟ್ಟರೆ, ಆ ಶಾಪವು ನನಗಾಗಲಿ. ನಾನು ಹೇಳಿದಂತೆ
ಮಾಡು. ನನಗೋಸ್ಕರ ಆಡುಗಳನ್ನು ತೆಗೆದುಕೊಂಡು
ಬಾ’’ ಎಂದು ಹೇಳಿದಳು.
14ಆದ್ದರಿಂದ ಯಾಕೋಬನು ಹೋಗಿ ಎರಡು ಆಡು
ಗಳನ್ನು ತೆಗೆದುಕೊಂಡು ಬಂದನು. ಇಸಾಕನಿಗೆ ಇಷ್ಟವಾದ
ರುಚಿಕರವಾದ ಪದಾರ್ಥಗಳನ್ನು ಆಕೆ ಅವುಗಳ ಮಾಂಸ
ದಿಂದ ತಯಾರಿಸಿದಳು. 15ಅನಂತರ ರೆಬೆಕ್ಕಳು ತನ್ನ
ಹಿರಿಯಮಗನಾದ ಏಸಾವನಿಗೆ ಇಷ್ಟವಾದ ಉಡುಪನ್ನು
ತೆಗೆದುಕೊಂಡಳು. ರೆಬೆಕ್ಕಳು ಆ ಉಡುಪನ್ನು ತನ್ನ ಕಿರೀ
ಮಗನಾದ ಯಾಕೋಬನಿಗೆ ತೊಡಿಸಿದಳು. 16ಆಡುಗಳ
ಚರ್ಮವನ್ನು ಯಾಕೋಬನ ಕೈಗಳಿಗೂ ಕೊರಳಿಗೂ ಸುತ್ತಿ
ದಳು. 17ಅನಂತರ ಆಕೆ ತಾನು ಸಿದ್ಧಪಡಿಸಿದ್ದ ಅಡಿಗೆಯನ್ನು
ಯಾಕೋಬನಿಗೆ ಕೊಟ್ಟಳು. 18ಯಾಕೋಬನು ತನ್ನ
ತಂದೆಯ ಬಳಿಗೆ ಹೋಗಿ, ‘‘ಅಪ್ಪಾ’’ ಎಂದು ಕರೆದನು.
ಅವನ ತಂದೆ, ‘‘ಏನು ಮಗನೇ, ನೀನು ಯಾರು?’’
ಎಂದು ಕೇಳಿದನು.
19ಯಾಕೋಬನು ತನ್ನ ತಂದೆಗೆ, ‘‘ನಾನು ಏಸಾವ. ನಿನ್ನ
ಮೊದಲನೆ ಮಗ. ನೀನು ಹೇಳಿದಂತೆ ನಾನು ಮಾಡಿ
ಕೊಂಡು ಬಂದಿದ್ದೇನೆ. ನಾನು ನಿನಗೋಸ್ಕರ ಬೇಟೆ
ಯಾಡಿದ ಪ್ರಾಣಿಯ ಮಾಂಸವನ್ನು ಕುಳಿತುಕೊಂಡು
ತಿನ್ನು. ಆನಂತರ ನೀನು ನನ್ನನ್ನು ಆಶೀರ್ವದಿಸಬಹುದು’’
ಎಂದು ಹೇಳಿದನು. 20ಆದರೆ ಇಸಾಕನು ತನ್ನ ಮಗನಿಗೆ,
‘‘ನೀನು ಇಷ್ಟು ಬೇಗನೆ ಬೇಟೆಯಾಡಿಕೊಂಡು
ಬಂದೆಯಾ?’’ ಎಂದು ಕೇಳಿದನು.
ಅದಕ್ಕೆ ಯಾಕೋಬನು, ‘‘ನಾನು ಬಹು ಬೇಗನೆ ಪ್ರಾಣಿ
ಗಳನ್ನು ಕಂಡುಕೊಳ್ಳುವಂತೆ ನಿನ್ನ ದೇವರಾದ

---

**ಷೀಬಾ** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ: ‘‘ಏಳು’’ ಅಥವಾ ‘‘ಪ್ರಮಾಣ.’’

ಯೆಹೋವನು ಸಹಾಯ ಮಾಡಿದನು'' ಎಂದು
ಉತ್ತರಿಸಿದನು.
21ಬಳಿಕ ಇಸಾಕನು ಯಾಕೋಬನಿಗೆ, ''ನನ್ನ ಬಳಿಗೆ
ಬಾ, ನನ್ನ ಮಗನನ್ನು ನಾನು ಮುಟ್ಟಿ ತಿಳಿದುಕೊಳ್ಳಬಲ್ಲೆ.
ನಾನು ನಿನ್ನನ್ನು ಮುಟ್ಟಿದರೆ, ನೀನು ನಿಜವಾಗಿಯೂ ನನ್ನ
ಮಗನಾದ ಏಸಾವನೋ ಇಲ್ಲವೋ ಎಂಬುದನ್ನು ತಿಳಿದು
ಕೊಳ್ಳಬಲ್ಲೆ'' ಎದು ಹೇಳಿದನು.
22ಆದ್ದರಿಂದ ಯಾಕೋಬನು ತನ್ನ ತಂದೆಯಾದ
ಇಸಾಕನ ಬಳಿಗೆ ಹೋದನು. ಇಸಾಕನು ಅವನನ್ನು
ಮುಟ್ಟಿ, ''ನಿನ್ನ ಸ್ವರ ಯಾಕೋಬನ ಸ್ವರವಿದ್ದಂತಿದೆ. ಆದರೆ
ನಿನ್ನ ಕೈಗಳು ಏಸಾವನ ಕೈಗಳಂತೆ ರೋಮದಿಂದ ಕೂಡಿವೆ''
ಅಂದನು. 23ಅವನು ಯಾಕೋಬನೆಂಬುದು ಇಸಾಕನಿಗೆ
ತಿಳಿಯಲಿಲ್ಲ. ಯಾಕಂದರೆ ಅವನ ಕೈಗಳು ಏಸಾವನ ಕೈಗ
ಳಂತೆ ರೋಮದಿಂದ ಕೂಡಿದ್ದವು. ಆದ್ದರಿಂದ ಇಸಾಕನು
ಯಾಕೋಬನನ್ನು ಆಶೀರ್ವದಿಸಿದನು.
24ಇಸಾಕನು ಅವನಿಗೆ, ''ನೀನು ನಿಜವಾಗಿಯೂ ನನ್ನ
ಮಗನಾದ ಏಸಾವನೊ?'' ಎಂದು ಕೇಳಿದನು.
ಅದಕ್ಕೆ ಯಾಕೋಬನು, ''ಹೌದು, ನಾನೇ'' ಎಂದು
ಉತ್ತರ ಕೊಟ್ಟನು.

### ಯಾಕೋಬನಿಗೆ ಆಶೀರ್ವಾದ

25ಆಗ ಇಸಾಕನು, ''ಊಟವನ್ನು ತೆಗೆದುಕೊಂಡು ಬಾ.
ನಾನು ಊಟಮಾಡಿ ನಿನ್ನನ್ನು ಆಶೀರ್ವದಿಸುವೆನು''
ಎಂದು ಹೇಳಿದನು. ಅಂತೆಯೇ ಯಾಕೋಬನು ಊಟ
ವನ್ನು ತಂದು ಕೊಟ್ಟಾಗ ಊಟಮಾಡಿದನು; ದ್ರಾಕ್ಷಾ
ರಸವನ್ನು ಕುಡಿದನು.
26ಬಳಿಕ ಇಸಾಕನು ಅವನಿಗೆ, ''ಮಗನೇ, ನನ್ನ ಬಳಿಗೆ
ಬಂದು ನನಗೆ ಮುದ್ದಿಡು'' ಅಂದನು. 27ಅದರಂತೆಯೇ
ಯಾಕೋಬನು ತಂದೆಯ ಬಳಿಗೆ ಹೋಗಿ ಅವನಿಗೆ ಮುದ್ದಿ
ಟ್ಟನು. ಇಸಾಕನು ಏಸಾವನ ಉಡುಪಿನ ವಾಸನೆಯನ್ನು
ನೋಡಿ ಅವನನ್ನು ಹೀಗೆ ಆಶೀರ್ವದಿಸಿದನು:
''ನನ್ನ ಮಗನ ಸುವಾಸನೆಯು ಯೆಹೋವನು
ಆಶೀರ್ವದಿಸಿದ ಪ್ರದೇಶಗಳಂತಿದೆ.
28ಯೆಹೋವನು ನಿನಗೆ ಬೇಕಾದಷ್ಟು ಮಳೆಯನ್ನು
ಕೊಡಲಿ; ನಿನಗೆ ಮಹಾಸುಗ್ಗಿಗಳು ಮತ್ತು ದ್ರಾಕ್ಷಾರಸವೂ
ದೊರೆಯಲಿ.
29ಎಲ್ಲಾ ಜನರು ನಿನ್ನ ಸೇವೆ ಮಾಡಲಿ; ಜನಾಂಗಗಳು
ನಿನಗೆ ತಲೆಬಾಗಲಿ. ನೀನು ನಿನ್ನ ಸಹೋದರರ ಮೇಲೆ
ಆಡಳಿತ ಮಾಡುವೆ. ನಿನ್ನ ತಾಯಿಯ ಗಂಡು ಮಕ್ಕಳು
ನಿನಗೆ ತಲೆಬಾಗಿ ವಿಧೇಯರಾಗುವರು. ನಿನ್ನನ್ನು ಶಪಿಸುವ
ಪ್ರತಿಯೊಬ್ಬನು ಶಾಪಗ್ರಸ್ಥನಾಗುವನು. ನಿನ್ನನ್ನು ಆಶೀರ್ವ
ದಿಸುವ ಪ್ರತಿಯೊಬ್ಬನು ಆಶೀರ್ವದಿಸಲ್ಪಡುವನು.''

### ಏಸಾವನ ''ಆಶೀರ್ವಾದ''

30ಇಸಾಕನು ಯಾಕೋಬನನ್ನು ಆಶೀರ್ವದಿಸಿದ ಬಳಿಕ
ಯಾಕೋಬನು ತನ್ನ ತಂದೆಯಾದ ಇಸಾಕನ ಬಳಿಯಿಂದ
ಹೊರಟುಹೋಗುವಷ್ಟರಲ್ಲಿ ಏಸಾವನು ಬೇಟೆಯಿಂದ
ಬಂದನು. 31ಏಸಾವನು ಸಹ ತನ್ನ ತಂದೆಗೆ ಇಷ್ಟವಾದ ರೀತಿ
ಯಲ್ಲಿ ವಿಶೇಷವಾದ ಆಹಾರವನ್ನು ಸಿದ್ಧಪಡಿಸಿ ತನ್ನ
ತಂದೆಯ ಬಳಿಗೆ ತೆಗೆದುಕೊಂಡು ಬಂದನು. ಅವನು ತನ್ನ
ತಂದೆಗೆ, ''ಅಪ್ಪಾ ಎದ್ದೇಳು, ನಿನಗೋಸ್ಕರ ನಿನ್ನ ಮಗನು
ಬೇಟೆಯಾಡಿದ ಪ್ರಾಣಿಯ ಮಾಂಸವನ್ನು ತಿನ್ನು, ನಂತರ
ನೀನು ನನ್ನನ್ನು ಆಶೀರ್ವದಿಸಬಹುದು'' ಎಂದು
ಹೇಳಿದನು.
32ಇಸಾಕನು ಅವನಿಗೆ, ''ನೀನು ಯಾರು?'' ಎಂದು
ಕೇಳಿದನು.
ಅವನು, ''ನಾನು ನಿನ್ನ ಹಿರಿಯಮಗನಾದ ಏಸಾವ''
ಎಂದು ಹೇಳಿದನು.
33ಆಗ ಇಸಾಕನು ತುಂಬ ವ್ಯಸನಗೊಂಡು ಅವನಿಗೆ,
''ನೀನು ಬರುವುದಕ್ಕಿಂತ ಮೊದಲೇ ಅಡಿಗೆಯನ್ನು ಸಿದ್ಧ
ಪಡಿಸಿ ನನಗೆ ತಂದುಕೊಟ್ಟವರು ಯಾರು? ನಾನು
ಅದನ್ನೆಲ್ಲ ತಿಂದು ಅವನನ್ನು ಆಶೀರ್ವದಿಸಿದೆನು. ಈಗ ನನ್ನ
ಆಶೀರ್ವಾದವನ್ನು ಹಿಂತೆಗೆದುಕೊಳ್ಳಲಾಗದು'' ಎಂದು
ಹೇಳಿದನು. 34ಏಸಾವನು ತನ್ನ ತಂದೆಯ ಮಾತುಗಳನ್ನು
ಕೇಳಿ ತುಂಬ ಕೋಪಗೊಂಡನು; ವ್ಯಥೆಪಟ್ಟನು; ಗೋಳಾ
ಡಿ ದನು. ಅವನು ತನ್ನ ತಂದೆಗೆ, ''ಹಾಗಾದರೆ, ನನ್ನನ್ನೂ
ಆಶೀರ್ವದಿಸಪ್ಪಾ'' ಎಂದು ಹೇಳಿದನು.
35ಇಸಾಕನು, ''ನಿನ್ನ ತಮ್ಮನು ನನ್ನನ್ನು ಮೋಸ
ಗೊಳಿಸಿದನು; ಅವನು ಬಂದು ನಿನ್ನ ಆಶೀರ್ವಾದವನ್ನು
ತೆಗೆದುಕೊಂಡನು'' ಎಂದು ಹೇಳಿದನು.
36ಏಸಾವನು, ''ಅವನ ಹೆಸರು ಯಾಕೋಬ (ಮೋಸ
ಗಾರ). ಅದೇ ಅವನಿಗೆ ಸರಿಯಾದ ಹೆಸರು. ಅವನು
ಎರಡು ಸಲ ನನಗೆ ಮೋಸಮಾಡಿದನು. ನನ್ನ ಚೊಚ್ಚಲು
ತನದ ಹಕ್ಕನ್ನು ತೆಗೆದುಕೊಂಡನು. ಈಗ ನನ್ನ ಆಶೀರ್ವಾ
ದವನ್ನು ತೆಗೆದುಕೊಂಡನು'' ಎಂದು ಹೇಳಿದನು. ನಂತರ
ಏಸಾವನು, ''ನನಗೋಸ್ಕರ ಯಾವ ಆಶೀರ್ವಾದವೂ
ಉಳಿದಿಲ್ಲವೆ?'' ಎಂದು ಕೇಳಿದನು.
37ಇಸಾಕನು, ''ಇಲ್ಲ, ತುಂಬ ತಡವಾಯಿತು. ನಿನ್ನ
ಮೇಲೆ ಆಡಳಿತ ಮಾಡುವ ಅಧಿಕಾರವನ್ನು ನಾನು
ಯಾಕೋಬನಿಗೆ ಕೊಟ್ಟಿದ್ದೇನೆ. ಅವನ ಸಹೋದರರೆಲ್ಲ
ಅವನಿಗೆ ಸೇವಕರಾಗಿರುವರು ಎಂದು ನಾನು ಹೇಳಿದ್ದೇನೆ.
ಅವನಿಗೆ ಬೇಕಾದಷ್ಟು ದವಸ ಧಾನ್ಯಗಳೂ ದ್ರಾಕ್ಷಾರಸವೂ
ದೊರೆಯುವಂತೆ ಆಶೀರ್ವಾದ ಮಾಡಿದ್ದೇನೆ. ನಿನಗೆ
ಕೊಡಲು ನನ್ನಲ್ಲಿ ಏನೂ ಉಳಿದಿಲ್ಲ ಮಗನೇ'' ಎಂದು
ಹೇಳಿದನು.

38ಆದರೆ ಏಸಾವನು ತನ್ನ ತಂದೆಯನ್ನು ಮತ್ತೆ ಬೇಡ
ತೊಡಗಿದನು. ''ಅಪ್ಪಾ ನನಗಾಗಿ ಒಂದಾದರೂ ಆಶೀ
ರ್ವಾದವಿಲ್ಲವೇ? ಅಪ್ಪಾ, ನನ್ನನ್ನು ಸಹ ಆಶೀರ್ವದಿಸು''
ಎಂದು ಏಸಾವನು ಅಳಲಾರಂಭಿಸಿದನು.
39ಆಗ ಇಸಾಕನು ಅವನಿಗೆ ಹೀಗೆ ಹೇಳಿದನು:
''ನೀನು ಒಳ್ಳೆಯ ಪ್ರದೇಶದಲ್ಲಿ ಜೀವಿಸುವುದಿಲ್ಲ.
ನಿನಗೆ ಬೇಕಾದಷ್ಟು ಇಬ್ಬನಿ ಇರುವುದಿಲ್ಲ.
40ನೀನು ಕತ್ತಿಯಿಂದಲೇ ಜೀವಿಸುವೆ. ನೀನು ನಿನ್ನ
ತಮ್ಮನ ಸೇವಕನಾಗಿರುವೆ. ಆದರೆ ನೀನು ಬಿಡುಗಡೆ
ಯಾಗಲು ಹೋರಾಡಿ ಅವನ ಹಿಡಿತದಿಂದ ತಪ್ಪಿಸಿ
ಕೊಳ್ಳುವೆ.''
41ಅಂದಿನಿಂದ ಏಸಾವನು ಯಾಕೋಬನನ್ನು ದ್ವೇಷಿಸಿ
ದನು. ಏಸಾವನು ತನ್ನೊಳಗೆ, ''ನನ್ನ ತಂದೆ ಬಹುಬೇಗನೆ
ಸತ್ತುಹೋಗುವನು. ಆಗ ನಾನು ಅವನಿಗಾಗಿ ದುಃಖಿಸಿ
ಆ ಬಳಿಕ ಯಾಕೋಬನನ್ನು ಕೊಲ್ಲುವೆನು'' ಅಂದು
ಕೊಂಡನು.
42ಏಸಾವನು ಯಾಕೋಬನನ್ನು ಕೊಲ್ಲಬೇಕೆಂದಿರು
ವುದು ರೆಬೆಕ್ಕಳಿಗೆ ತಿಳಿಯಿತು. ಆಕೆ ಯಾಕೋಬನನ್ನು
ಕರೆಸಿ ಅವನಿಗೆ, ''ಕೇಳು, ನಿನ್ನ ಅಣ್ಣನಾದ ಏಸಾವನು
ನಿನ್ನನ್ನು ಕೊಲ್ಲಬೇಕೆಂದಿದ್ದಾನೆ. 43ಆದ್ದರಿಂದ ಮಗನೇ,
ನಾನು ಹೇಳಿದಂತೆ ಮಾಡು. ನನ್ನ ಅಣ್ಣನಾದ ಲಾಬಾನನು
ಹಾರಾನಿನಲ್ಲಿ ವಾಸವಾಗಿದ್ದಾನೆ. ಅವನ ಬಳಿಗೆ ಹೋಗಿ
ಅಡಗಿಕೊ. 44ಅವನೊಂದಿಗೆ ಸ್ವಲ್ಪ ಕಾಲವಿರು. ನಿನ್ನ
ಅಣ್ಣನ ಕೋಪ ತಣ್ಣಗಾಗುವವರೆಗೆ ನೀನು ಅವನೊಂದಿ
ಗಿರು. 45ಸ್ವಲ್ಪ ಸಮಯದ ನಂತರ, ನೀನು ಮಾಡಿದ್ದನ್ನು
ನಿನ್ನ ಅಣ್ಣನು ಮರೆತುಬಿಡುವನು. ಆಗ ನಿನ್ನನ್ನು ಅಲ್ಲಿಂದ
ಕರೆದುಕೊಂಡು ಬರಲು ನಾನು ಒಬ್ಬ ಸೇವಕನನ್ನು ಅಲ್ಲಿಗೆ
ಕಳುಹಿಸಿಕೊಡುವೆನು. ಒಂದೇ ದಿನದಲ್ಲಿ, ನನ್ನ ಇಬ್ಬರು
ಗಂಡುಮಕ್ಕಳನ್ನು ಕಳೆದುಕೊಳ್ಳಲು ನನಗೆ ಇಷ್ಟವಿಲ್ಲ''
ಎಂದು ಹೇಳಿದಳು.
46ನಂತರ ರೆಬೆಕ್ಕಳು ಇಸಾಕನಿಗೆ, ''ನಿನ್ನ ಮಗನಾದ
ಏಸಾವನು ಹಿತ್ತಿಯರ ಸ್ತ್ರೀಯರನ್ನು ಮದುವೆ ಮಾಡಿ
ಕೊಂಡಿದ್ದಾನೆ. ಆ ಸ್ತ್ರೀಯರಿಂದ ನನಗೆ ಸಾಕಾಗಿ
ಹೋಗಿದೆ; ಯಾಕಂದರೆ ಅವರು ನಮ್ಮ ಜನರಲ್ಲ.
ಯಾಕೋಬನು ಸಹ ಇಂಥ ಸ್ತ್ರೀಯರಲ್ಲಿ ಒಬ್ಬಳನ್ನು
ಮದುವೆ ಮಾಡಿಕೊಂಡರೆ ನಾನು ಸಾಯುವುದೇ
ಮೇಲು'' ಎಂದು ಹೇಳಿದಳು.

## ಯಾಕೋಬನು ಹೆಂಡತಿಗಾಗಿ ಹುಡುಕಿದ್ದು

28 ಇಸಾಕನು ಯಾಕೋಬನನ್ನು ಕರೆದು ಅವನನ್ನು
ಆಶೀರ್ವದಿಸಿ ಅವನಿಗೆ, ''ನೀನು ಕಾನಾನಿನ
ಸ್ತ್ರೀಯನ್ನು ಮದುವೆಯಾಗಕೂಡದು. 2ಆದ್ದರಿಂದ ಈ
ಸ್ಥಳವನ್ನು ಬಿಟ್ಟು ಪದ್ದನ್ಅರಾಮಿಗೆ ಹೊರಟು ನಿನ್ನ
ತಾಯಿಯ ತಂದೆಯಾದ ಬೆತೂವೇಲನ ಮನೆಗೆ ಹೋಗು.
ನಿನ್ನ ತಾಯಿಯ ಅಣ್ಣನಾದ ಲಾಬಾನನು ಅಲ್ಲಿ ವಾಸಿಸು
ತ್ತಿದ್ದಾನೆ. ಅವನ ಹೆಣ್ಣು ಮಕ್ಕಳಲ್ಲಿ ಒಬ್ಬಳನ್ನು ಮದುವೆ
ಮಾಡಿಕೊ. 3ಸರ್ವಶಕ್ತನಾದ ದೇವರು ನಿನ್ನನ್ನು ಆಶೀ
ರ್ವದಿಸಿ, ನಿನಗೆ ಅನೇಕ ಮಕ್ಕಳನ್ನು ಕೊಡುವಂತೆಯೂ
ನೀನು ಮಹಾಜನಾಂಗದ ತಂದೆಯಾಗುವಂತೆಯೂ
ನಾನು ಪ್ರಾರ್ಥಿಸುವೆನು. 4ದೇವರು ಅಬ್ರಹಾಮನನ್ನು
ಆಶೀರ್ವದಿಸಿದ ರೀತಿಯಲ್ಲಿ ನಿನ್ನನ್ನೂ ನಿನ್ನ ಮಕ್ಕಳನ್ನೂ
ಆಶೀರ್ವದಿಸುವಂತೆಯೂ ನೀನು ವಾಸಿಸುವ ಸ್ಥಳದಲ್ಲಿ
ಸ್ವಂತ ಭೂಮಿಯನ್ನು ಪಡೆದುಕೊಳ್ಳುವಂತೆಯೂ ನಾನು
ಪ್ರಾರ್ಥಿಸುವೆನು. ದೇವರು ಅಬ್ರಹಾಮನಿಗೆ ಕೊಟ್ಟ
ಭೂಮಿಯೇ ಅದು'' ಎಂದು ಹೇಳಿ ಕಳುಹಿಸಿಕೊಟ್ಟನು.
5ಅಂತೆಯೇ ಯಾಕೋಬನು ಪದ್ದನ್ಅರಾಮಿಗೆ
ಹೊರಟು ರೆಬೆಕ್ಕಳ ಅಣ್ಣನಾದ ಲಾಬಾನನ ಬಳಿಗೆ
ಹೋದನು. ಬೆತೂವೇಲನು ಲಾಬಾನನ ಮತ್ತು ರೆಬೆಕ್ಕಳ
ತಂದೆ. ರೆಬೆಕ್ಕಳು ಯಾಕೋಬನ ಮತ್ತು ಏಸಾವನ ತಾಯಿ.
6ತನ್ನ ತಂದೆಯಾದ ಇಸಾಕನು ಯಾಕೋಬನನ್ನು
ಆಶೀರ್ವದಿಸಿದ್ದೂ, ಮದುವೆ ಮಾಡಿಕೊಳ್ಳಲು ಪದ್ದನ್
ಅರಾಮಿಗೆ ಕಳುಹಿಸಿದ್ದೂ, ಕಾನಾನಿನ ಸ್ತ್ರೀಯನ್ನು
ಮದುವೆಯಾಗಕೂಡದೆಂದು ಯಾಕೋಬನಿಗೆ ಆಜ್ಞಾಪಿ
ಸಿರುವುದೂ ಏಸಾವನಿಗೆ ತಿಳಿಯಿತು. 7ಇದಲ್ಲದೆ
ಯಾಕೋಬನು ತನ್ನ ತಂದೆತಾಯಿಗಳಿಗೆ ವಿಧೇಯನಾಗಿ
ಪದ್ದನ್ಅರಾಮಿಗೆ ಹೋದದ್ದೂ ಏಸಾವನಿಗೆ ಗೊತ್ತಾ
ಯಿತು. 8ತನ್ನ ಗಂಡುಮಕ್ಕಳು ಕಾನಾನಿನ ಸ್ತ್ರೀಯರನ್ನು
ಮದುವೆಯಾಗುವುದು ತನ್ನ ತಂದೆಗೆ ಇಷ್ಟವಿಲ್ಲ
ವೆಂಬುದೂ ಏಸಾವನಿಗೆ ತಿಳಿಯಿತು. 9ಏಸಾವನಿಗೆ ಈಗಾ
ಗಲೇ ಇಬ್ಬರು ಹೆಂಡತಿಯರಿದ್ದರು. ಆದರೂ ಅವನು
ಇಷ್ಮಾಯೇಲನ ಬಳಿಗೆ ಹೋಗಿ ಅವನ ಮಗಳಾದ
ಮಹಲತ್ ಎಂಬಾಕೆಯನ್ನು ಮದುವೆ ಮಾಡಿಕೊಂಡನು.
ಇಷ್ಮಾಯೇಲನು ಅಬ್ರಹಾಮನ ಮಗನು. ಮಹಲತಳು
ನೆಬಾಯೋತನ ತಂಗಿ.

## ದೇವರ ಮನೆ – ಬೇತೇಲ್

10ಯಾಕೋಬನು ಬೇರ್ಷೆಬವನ್ನು ಬಿಟ್ಟು ಹಾರಾನಿಗೆ
ಹೋದನು. 11ಯಾಕೋಬನು ಪ್ರಯಾಣ ಮಾಡು
ತ್ತಿರುವಾಗ ಸೂರ್ಯಾಸ್ತವಾಯಿತು. ಆದ್ದರಿಂದ
ಯಾಕೋಬನು ಆ ರಾತ್ರಿ ಇಳಿದುಕೊಳ್ಳಲು ಒಂದು ಸ್ಥಳಕ್ಕೆ
ಹೋದನು. ಯಾಕೋಬನು ಆ ಸ್ಥಳದಲ್ಲಿ ಒಂದು ಕಲ್ಲನ್ನು
ಕಂಡು ಅದರ ಮೇಲೆ ತಲೆಯಿಟ್ಟು ಮಲಗಿಕೊಂಡನು.
12ಯಾಕೋಬನಿಗೆ ಒಂದು ಕನಸಾಯಿತು. ಆ ಕನಸಿನಲ್ಲಿ
ಒಂದು ಏಣಿ ನೆಲದ ಮೇಲೆ ನಿಂತಿತ್ತು. ಅದು ಆಕಾಶವನ್ನು

ಮುಟ್ಟಿತ್ತು. ದೇವದೂತರು ಅದರಲ್ಲಿ ಮೇಲೇರುತ್ತಾ ಕೆಳ
ಗಿಳಿಯುತ್ತಾ ಇರುವುದನ್ನು ಯಾಕೋಬನು ಕಂಡನು.
[13]ಯೆಹೋವನು ಏಣಿಯ ತುದಿಯಲ್ಲಿ ನಿಂತಿರುವುದನ್ನು
ಯಾಕೋಬನು ಕಂಡನು. ಯೆಹೋವನು ಅವನಿಗೆ,
‘‘ನಿನ್ನ ಅಜ್ಜನಾದ ಅಬ್ರಹಾಮನ ದೇವರಾಗಿರುವ
ಯೆಹೋವನೇ ನಾನು. ನಾನು ಇಸಾಕನ ದೇವರು. ಈಗ
ನೀನು ಮಲಗಿಕೊಂಡಿರುವ ದೇಶವನ್ನು ನಾನು ನಿನಗೆ
ಕೊಡುವೆನು. ನಾನು ಈ ದೇಶವನ್ನು ನಿನಗೂ ನಿನ್ನ
ಮಕ್ಕಳಿಗೆ ಕೊಡುವೆನು. [14]ಭೂಮಿಯ ಮೇಲೆ ಧೂಳಿನ
ಕಣಗಳಿರುವಂತೆ ನಿನಗೆ ಅನೇಕಾನೇಕ ಸಂತತಿಗಳಿರು
ವರು. ಅವರು ಪೂರ್ವಪಶ್ಚಿಮಗಳಿಗೂ ಉತ್ತರ ದಕ್ಷಿಣ
ಗಳಿಗೂ ಹರಡಿಕೊಳ್ಳುವರು. ನಿನ್ನ ಮೂಲಕವೂ ನಿನ್ನ
ಸಂತತಿಯವರ ಮೂಲಕವೂ ಭೂಮಿಯ ಮೇಲಿರುವ
ಎಲ್ಲಾ ಕುಲಗಳವರು ಆಶೀರ್ವಾದ ಹೊಂದುವರು.

[15]‘‘ನಾನು ನಿನ್ನ ಸಂಗಡವಿದ್ದು ನೀನು ಹೋಗುವ ಪ್ರತಿ
ಯೊಂದು ಸ್ಥಳದಲ್ಲಿಯೂ ನಿನ್ನನ್ನು ಕಾಪಾಡುವೆನು;
ನಿನ್ನನ್ನು ಈ ಸ್ಥಳಕ್ಕೆ ಮತ್ತೆ ಕರೆದುಕೊಂಡು ಬರುವೆನು.
ನಾನು ವಾಗ್ದಾನ ಮಾಡಿದ್ದನ್ನು ನೆರವೇರಿಸುವ ತನಕ ನಾನು
ನಿನ್ನನ್ನು ಬಿಟ್ಟುಹೋಗುವುದಿಲ್ಲ’’ ಎಂದು ಹೇಳಿದನು.

[16]ಆಗ ಯಾಕೋಬನು ನಿದ್ರೆಯಿಂದ ಎಚ್ಚೆತ್ತು,
‘‘ಖಂಡಿತವಾಗಿಯೂ ಈ ಸ್ಥಳದಲ್ಲಿ ದೇವರಿದ್ದಾನೆ. ಆದರೆ
ಅದು ನನಗೆ ಗೊತ್ತಿರಲಿಲ್ಲ’’ ಎಂದು ಹೇಳಿದನು.

[17]ಯಾಕೋಬನಿಗೆ ಭಯವಾಗಿತ್ತು. ಅವನು, ‘‘ಇದು
ತುಂಬ ಮಹತ್ವವಾದ ಸ್ಥಳ. ಇದು ದೇವರ ಮನೆ. ಇದು
ಸ್ವರ್ಗಕ್ಕೆ ಬಾಗಿಲು’’ ಎಂದು ಹೇಳಿದನು.

[18]ಯಾಕೋಬನು ಮರುದಿನ ಮುಂಜಾನೆ ಬೇಗನೆ
ಎದ್ದು, ತಾನು ಮಲಗಿಕೊಂಡಿದ್ದ ಕಲ್ಲನ್ನು ತೆಗೆದುಕೊಂಡು
ಅದನ್ನು ಕಂಬವಾಗಿ ನೆಲದಲ್ಲಿ ನಿಲ್ಲಿಸಿದನು. ನಂತರ ಆ
ಕಲ್ಲಿನ ಮೇಲೆ ಎಣ್ಣೆಯನ್ನು ಸುರಿದನು. ಹೀಗೆ ಅವನು ಆ
ಕಲ್ಲನ್ನು ದೇವರ ನೆನಪಿಗಾಗಿ ಪ್ರತಿಷ್ಠಿಸಿದನು. [19]ಆ ಸ್ಥಳದ
ಹೆಸರು ಲೂಜ್. ಆದರೆ ಯಾಕೋಬನು ಅದಕ್ಕೆ
ಬೇತೇಲ್* ಎಂದು ಹೆಸರಿಟ್ಟನು. [20]ನಂತರ ಯಾಕೋ
ಬನು ಈ ಪ್ರಮಾಣವನ್ನು ಮಾಡಿದನು: ‘‘ದೇವರು ನನ್ನ
ಸಂಗಡವಿದ್ದು ನಾನು ಹೋದಲ್ಲೆಲ್ಲ ನನ್ನನ್ನು ಕಾಪಾಡಿ
ಊಟಕ್ಕೆ ಆಹಾರವನ್ನೂ, ಉಡಲು ಬಟ್ಟೆಗಳನ್ನೂ
ಕೊಟ್ಟು, [21]ನಾನು ಸಮಾಧಾನದಿಂದ ನನ್ನ ತಂದೆಯ
ಮನೆಗೆ ಹಿಂತಿರುಗಿ ಬರುವಂತೆ ಮಾಡಿದರೆ ಯೆಹೋವನೇ
ನನ್ನ ದೇವರಾಗಿರುವನು. [22]ನಾನು ಕಲ್ಲನ್ನು ನೆಟ್ಟಿರುವ
ಈ ಸ್ಥಳವು ದೇವರ ಪವಿತ್ರ ಸ್ಥಳವಾಗುವುದು. ಇದಲ್ಲದೆ
ದೇವರು ನನಗೆ ಕೊಡುವುದರಲ್ಲೆಲ್ಲಾ ಹತ್ತನೆಯ ಒಂದು
ಭಾಗವನ್ನು ನಾನು ಆತನಿಗೆ ಕೊಡುತ್ತೇನೆ.’’

## ಯಾಕೋಬನು ರಾಹೇಲಳನ್ನು ಭೇಟಿಯಾದದ್ದು

29 ಬಳಿಕ ಯಾಕೋಬನು ತನ್ನ ಪ್ರಯಾಣವನ್ನು
ಮುಂದುವರಿಸಿದನು. ಅವನು ಪೂರ್ವ ದಿಕ್ಕಿನ
ಲ್ಲಿದ್ದ ನಾಡಿಗೆ ಹೋದನು. [2]ಯಾಕೋಬನು ದೃಷ್ಟಿಸಿ
ನೋಡಿದಾಗ, ಹೊಲದಲ್ಲಿ ಅವನಿಗೆ ಒಂದು ಬಾವಿ
ಕಾಣಿಸಿತು. ಬಾವಿಯ ಸಮೀಪದಲ್ಲಿ ಮೂರು ಕುರಿ
ಮಂದೆಗಳು ಮಲಗಿಕೊಂಡಿದ್ದವು. ಕುರಿಗಳಿಗೆ ಆ
ಬಾವಿಯ ನೀರನ್ನೇ ಕುಡಿಸುತ್ತಿದ್ದರು. ಬಾವಿಯ ಮೇಲೆ
ಅಗಲವಾದ ದೊಡ್ಡ ಕಲ್ಲನ್ನು ಮುಚ್ಚಲಾಗಿತ್ತು. [3]ಕುರಿ
ಮಂದೆಗಳೆಲ್ಲ ಒಟ್ಟಿಗೆ ಸೇರಿದ ಮೇಲೆ, ಕುರುಬರು
ಬಾವಿಯ ಮೇಲಿನ ಕಲ್ಲನ್ನು ಉರುಳಿಸುತ್ತಿದ್ದರು.
ಆಮೇಲೆ ಎಲ್ಲಾ ಕುರಿಗಳು ಬಾವಿಯ ನೀರನ್ನು ಕುಡಿ
ಯುತ್ತಿದ್ದವು. ಕುರಿಗಳು ನೀರು ಕುಡಿದಾದ ಮೇಲೆ ಕುರು
ಬರು ಕಲ್ಲನ್ನು ಮತ್ತೆ ಮುಚ್ಚುತ್ತಿದ್ದರು.

[4]ಯಾಕೋಬನು ಅಲ್ಲಿದ್ದ ಕುರುಬರಿಗೆ, ‘‘ಸಹೋದ
ರರೇ, ನೀವು ಎಲ್ಲಿಯವರು?’’ ಎಂದು ಕೇಳಿದನು.

ಅವರು ‘‘ನಾವು ಹಾರಾನಿನವರು’’ ಎಂದು ಉತ್ತರ
ಕೊಟ್ಟರು.

[5]ನಂತರ ಯಾಕೋಬನು ಅವರಿಗೆ, ‘‘ನಾಹೋರನ
ಮೊಮ್ಮಗನಾದ ಲಾಬಾನನು ನಿಮಗೆ ಗೊತ್ತೆ?’’ ಎಂದು
ಕೇಳಿದನು.

ಕುರುಬರು, ‘‘ನಮಗೆ ಗೊತ್ತು’’ ಎಂದು
ಉತ್ತರಿಸಿದರು.

[6]ಯಾಕೋಬನು, ‘‘ಅವನು ಕ್ಷೇಮವಾಗಿರುವನೇ?’’
ಎಂದು ಕೇಳಿದನು.

ಅವರು, ‘‘ಅವನು ಕ್ಷೇಮವಾಗಿದ್ದಾನೆ. ಅಗೋ, ಆ ಕುರಿ
ಗಳೊಂದಿಗೆ ಬರುತ್ತಿರುವವಳೇ ಅವನ ಮಗಳಾದ
ರಾಹೇಲಳು’’ ಎಂದು ಉತ್ತರಿಸಿದರು.

[7]ಯಾಕೋಬನು, ‘‘ನೋಡಿ, ಇನ್ನೂ ಹೊತ್ತಾಗಿಲ್ಲ;
ರಾತ್ರಿಗಾಗಿ ಕುರಿಗಳನ್ನು ಒಟ್ಟಿಗೆ ಸೇರಿಸುವ ಸಮಯ
ವಾಗಿಲ್ಲ; ನೀರು ಕುಡಿಸಿ ಅವುಗಳನ್ನು ಮೇಯಿಸಿರಿ’’
ಎಂದನು.

[8]ಆ ಕುರುಬರು, ‘‘ಕುರಿಮಂದೆಗಳೆಲ್ಲ ಒಟ್ಟಿಗೆ ಸೇರುವ
ವರೆಗೆ ನಾವು ಬಾವಿಯಿಂದ ಕಲ್ಲನ್ನು ತೆಗೆದು ಕುರಿಗಳಿಗೆ
ನೀರು ಕುಡಿಸುವಂತಿಲ್ಲ; ಒಟ್ಟಿಗೆ ಕೂಡಿಬಂದಾಗಲೇ
ನೀರು ಕುಡಿಸುತ್ತೇವೆ’’ ಎಂದು ಹೇಳಿದರು.

[9]ಯಾಕೋಬನು ಕುರುಬರೊಡನೆ ಮಾತಾಡುತ್ತಿರು
ವಾಗ ರಾಹೇಲಳು ತನ್ನ ತಂದೆಯ ಕುರಿಗಳೊಡನೆ
ಬಂದಳು. (ಕುರಿಗಳನ್ನು ನೋಡಿಕೊಳ್ಳುವುದು
ರಾಹೇಲಳ ಕೆಲಸವಾಗಿತ್ತು.) [10]ರಾಹೇಲಳು ಲಾಬಾನನ
ಮಗಳು. ಲಾಬಾನನು ಯಾಕೋಬನ ತಾಯಿಯಾದ
ರೆಬೆಕ್ಕಳ ಅಣ್ಣ. ಯಾಕೋಬನು ರಾಹೇಲಳನ್ನು

---

**ಬೇತೇಲ್** ಈ ಹೆಸರಿನ ಅರ್ಥ: ‘‘ದೇವರ ಮನೆ.’’

ನೋಡಿದಾಗ ಬಾವಿಯ ಮೇಲಿದ್ದ ಕಲ್ಲನ್ನು ತೆಗೆದುಹಾಕಿ
ತನ್ನ ತಾಯಿಯ ಅಣ್ಣನಾದ ಲಾಬಾನನ ಕುರಿಗಳಿಗೆ
ನೀರು ಕೊಟ್ಟನು. 11ಬಳಿಕ ಯಾಕೋಬನು ರಾಹೇಲಳಿಗೆ
ಮುದ್ದಿಟ್ಟು ಅತ್ತನು. 12ಯಾಕೋಬನು ರಾಹೇಲಳಿಗೆ,
ತಾನು ಅವಳ ತಂದೆಯ ಕುಟುಂಬದವನೆಂದೂ ರೆಬೆಕ್ಕಳ
ಮಗನೆಂದೂ ತಿಳಿಸಿದನು. ಆಗ ರಾಹೇಲಳು ಮನೆಗೆ ಓಡಿ
ಹೋಗಿ ತನ್ನ ತಂದೆಗೆ ಈ ಸುದ್ದಿಯನ್ನು ತಿಳಿಸಿದಳು.

13ಲಾಬಾನನು ತನ್ನ ತಂಗಿಯ ಮಗನಾದ
ಯಾಕೋಬನ ವಿಷಯವನ್ನು ಕೇಳಿ ಭೇಟಿಯಾಗಲು ಓಡಿ
ಬಂದನು. ಲಾಬಾನನು ಅವನನ್ನು ಅಪ್ಪಿಕೊಂಡು
ಮುದ್ದಿಟ್ಟು ಮನೆಗೆ ಕರೆದುಕೊಂಡು ಬಂದನು.
ಯಾಕೋಬನು ನಡೆದ ಪ್ರತಿಯೊಂದನ್ನೂ ಲಾಬಾನನಿಗೆ
ತಿಳಿಸಿದನು.

14ನಂತರ ಲಾಬಾನನು, ‘‘ಇದು ಆಶ್ಚರ್ಯವಾಗಿದೆ;
ನೀನು ನನ್ನ ಸ್ವಂತ ಕುಟುಂಬದವನು’’ ಎಂದು ಹೇಳಿ
ದನು. ಆದ್ದರಿಂದ ಯಾಕೋಬನು ಲಾಬಾನನೊಡನೆ
ಒಂದು ತಿಂಗಳವರೆಗೆ ಇದ್ದನು.

## ಯಾಕೋಬನಿಗಾದ ಮೋಸ

15ಒಂದು ದಿನ ಲಾಬಾನನು ಯಾಕೋಬನಿಗೆ, ‘‘ನೀನು
ಸಂಬಳ ತೆಗೆದುಕೊಳ್ಳದೆ ನನ್ನ ಬಳಿಯಲ್ಲಿ ಕೆಲಸ
ಮಾಡುವುದು ಸರಿಯಲ್ಲ. ನೀನು ನನ್ನ ಸಂಬಂಧಿಕನೇ
ಹೊರತು ಸೇವಕನಲ್ಲ. ನಾನು ನಿನಗೆ ಎಷ್ಟು ಸಂಬಳ
ಕೊಡಲಿ?’’ ಎಂದು ಕೇಳಿದನು.

16ಲಾಬಾನನಿಗೆ ಇಬ್ಬರು ಹೆಣ್ಣು ಮಕ್ಕಳಿದ್ದರು. ಹಿರಿ
ಯವಳ ಹೆಸರು ಲೇಯಾ; ಕಿರಿಯವಳ ಹೆಸರು ರಾಹೇಲ್.

17ರಾಹೇಲಳು ಸುಂದರವಾಗಿದ್ದಳು. ಲೇಯಾಳ ಕಣ್ಣು
ಗಳು ಸೌಮ್ಯವಾಗಿದ್ದವು.* 18ಯಾಕೋಬನು ರಾಹೇಲ
ಳನ್ನು ಪ್ರೀತಿಸಿದನು. ಯಾಕೋಬನು ಲಾಬಾನನಿಗೆ,
‘‘ನಿನ್ನ ಚಿಕ್ಕಮಗಳಾದ ರಾಹೇಲಳನ್ನು ನನಗೆ ಮದುವೆ
ಮಾಡಿಕೊಡುವುದಾದರೆ ನಾನು ನಿನಗೆ ಏಳು ವರ್ಷ ಸೇವೆ
ಮಾಡುವೆನು’’ ಎಂದು ಹೇಳಿದನು.

19ಲಾಬಾನನು, ‘‘ಬೇರೊಬ್ಬನು ಆಕೆಯನ್ನು ಮದುವೆ
ಯಾಗುವುದಕ್ಕಿಂತ ನೀನು ಮದುವೆಯಾಗುವುದೇ ಆಕೆಗೆ
ಒಳ್ಳೆಯದು. ಆದ್ದರಿಂದ ನನ್ನೊಂದಿಗಿರು’’ ಎಂದು
ಹೇಳಿದನು.

20ಆದ್ದರಿಂದ ಯಾಕೋಬನು ಅವನೊಂದಿಗೆ ಇದ್ದು
ಕೊಂಡು ಏಳು ವರ್ಷಗಳವರೆಗೆ ಲಾಬಾನನ ಸೇವೆ ಮಾಡಿ
ದನು. ಆದರೆ ಅವನು ರಾಹೇಲಳನ್ನು ತುಂಬಾ ಪ್ರೀತಿಸು
ತ್ತಿದ್ದುದರಿಂದ ಆ ಸಮಯವು ಅವನಿಗೆ ತುಂಬಾ ಕಡಿಮೆ
ಯಂತೆ ಕಾಣಿಸಿತು.

21ಏಳು ವರ್ಷಗಳಾದ ಮೇಲೆ ಯಾಕೋಬನು
ಲಾಬಾನನಿಗೆ, ‘‘ನನಗೆ ರಾಹೇಳಲನ್ನು ಮದುವೆ ಮಾಡಿ
ಕೊಡು. ನನ್ನ ಸೇವೆಯ ಕಾಲ ಮುಗಿದುಹೋಯಿತು’’
ಎಂದು ಹೇಳಿದನು.

22ಆದ್ದರಿಂದ ಲಾಬಾನನು ಆ ಸ್ಥಳದಲ್ಲಿದ್ದ ಜನರಿಗೆಲ್ಲ
ಒಂದು ಔತಣಕೂಟವನ್ನು ಏರ್ಪಡಿಸಿದನು. 23ಆ ರಾತ್ರಿ
ಲಾಬಾನನು ತನ್ನ ಮಗಳಾದ ಲೇಯಾಳನ್ನು
ಯಾಕೋಬನ ಬಳಿಗೆ ಕಳುಹಿಸಿದನು. ಯಾಕೋಬನು
ಆಕೆಯನ್ನು ಕೂಡಿದನು. 24(ಲಾಬಾನನು ತನ್ನ ಸೇವಕಿ
ಯಾದ ಜಿಲ್ಪಾಳನ್ನು ತನ್ನ ಮಗಳಿಗೆ ಸೇವಕಿಯನ್ನಾಗಿ
ಕೊಟ್ಟನು.) 25ಮುಂಜಾನೆ ಯಾಕೋಬನು ಎದ್ದು
ನೋಡಿದಾಗ ಅವನೊಂದಿಗೆ ಲೇಯಾ ಇದ್ದಳು.
ಯಾಕೋಬನು ಲಾಬಾನನಿಗೆ, ‘‘ನೀನು ನನಗೆ ಮೋಸ
ಮಾಡಿದೆ. ನಾನು ರಾಹೇಲಳನ್ನು ಮದುವೆ ಮಾಡಿಕೊಳ್ಳು
ವುದಕ್ಕಾಗಿ ತುಂಬಾ ಕಷ್ಟಪಟ್ಟು ಕೆಲಸ ಮಾಡಿದೆ. ನೀನು
ನನಗೇಕೆ ಮೋಸ ಮಾಡಿದೆ?’’ ಎಂದು ಕೇಳಿದನು.

26ಲಾಬಾನನು, ‘‘ನಮ್ಮ ದೇಶದಲ್ಲಿ ದೊಡ್ಡಮಗಳ
ಮದುವೆಯಾಗದ ಹೊರತು ಚಿಕ್ಕಮಗಳಿಗೆ ಮದುವೆ
ಮಾಡುವುದಿಲ್ಲ. 27ಆದರೆ ಆಕೆಯ ಮದುವೆಯ ವಾರ
ವನ್ನು ಮುಂದುವರಿಸು. ನಾನು ನಿನಗೆ ರಾಹೇಲಳನ್ನು ಸಹ
ಮದುವೆ ಮಾಡಿಕೊಡುತ್ತೇನೆ. ಆದರೆ ನೀನು ನನಗೆ
ಇನ್ನೂ ಏಳು ವರ್ಷ ಸೇವೆ ಮಾಡಬೇಕು’’ ಎಂದು
ಹೇಳಿದನು.

28ಅಂತೆಯೇ ಯಾಕೋಬನು ಒಂದು ವಾರವನ್ನು
ಕಳೆದನು. ಬಳಿಕ ಲಾಬಾನನು ತನ್ನ ಮಗಳಾದ ರಾಹೇಲ
ಳನ್ನೂ ಅವನಿಗೆ ಹೆಂಡತಿಯನ್ನಾಗಿ ಕೊಟ್ಟನು.
29(ಲಾಬಾನನು ತನ್ನ ಸೇವಕಿಯಾದ ಬಿಲ್ಹಾಳನ್ನು ತನ್ನ
ಮಗಳಾದ ರಾಹೇಲಳಿಗೆ ಸೇವಕಿಯನ್ನಾಗಿ ಕೊಟ್ಟನು.)
30ಯಾಕೋಬನು ರಾಹೇಲಳನ್ನೂ ಕೂಡಿದನು.
ಯಾಕೋಬನು ರಾಹೇಲಳನ್ನು ಲೇಯಳಿಗಿಂತ ಹೆಚ್ಚಾಗಿ
ಪ್ರೀತಿಸಿ ಆಕೆಗೋಸ್ಕರ ಇನ್ನೂ ಏಳು ವರ್ಷ ಸೇವೆ
ಮಾಡಿದನು.

## ಯಾಕೋಬನ ಕುಟುಂಬದ ಅಭಿವೃದ್ಧಿ

31ಯಾಕೋಬನು ರಾಹೇಲಳನ್ನು ಲೇಯಾಳಿಗಿಂತ
ಹೆಚ್ಚಾಗಿ ಪ್ರೀತಿಸುವುದನ್ನು ಯೆಹೋವನು ನೋಡಿದನು.
ಆದ್ದರಿಂದ ಯೆಹೋವನು ಲೇಯಾಳಿಗೆ ಮಕ್ಕಳಾಗುವಂತೆ
ಮಾಡಿದನು. ಆದರೆ ರಾಹೇಲಳಿಗೆ ಮಕ್ಕಳಿರಲಿಲ್ಲ.

32ಲೇಯಳು ಒಬ್ಬ ಮಗನನ್ನು ಹೆತ್ತಳು. ಆಕೆಯು ತನ್ನೊ
ಳಗೆ, ‘‘ಯೆಹೋವನು ನನ್ನ ದುಃಖವನ್ನು ನೋಡಿದ್ದಾನೆ.

---

**ಲೇಯಾಳ ಕಣ್ಣುಗಳು ಸೌಮ್ಯವಾಗಿದ್ದವು** ಇದರರ್ಥ: ಲೇಯಾಳು ಬಹಳ ಸುಂದರವಾಗಿರಲಿಲ್ಲ.

ನನ್ನ ಗಂಡನು ನನ್ನನ್ನು ಪ್ರೀತಿಸುವುದಿಲ್ಲ. ಈಗಲಾದರೊ ಅವನು ನನ್ನನ್ನು ಪ್ರೀತಿಸಬಹುದು'' ಎಂದು ಹೇಳಿ ಆ ಮಗುವಿಗೆ ರೂಬೇನ್* ಎಂದು ಹೆಸರಿಟ್ಟಳು. 33ಲೇಯಾ ಮತ್ತೆ ಬಸುರಾಗಿ ಮತ್ತೊಬ್ಬ ಮಗನನ್ನು ಹೆತ್ತಳು. ಆಕೆ ತನ್ನೊಳಗೆ, ''ನಾನು ಗಂಡನ ಅಲಕ್ಷ್ಯಕ್ಕೆ ಗುರಿಯಾದೆನೆಂದು ಯೆಹೋವನು ತಿಳಿದು ನನಗೆ ಈ ಮಗುವನ್ನು ಕೊಟ್ಟಿದ್ದಾನೆ'' ಎಂದು ಹೇಳಿ ಆ ಮಗುವಿಗೆ ಸಿಮೆಯೋನ್* ಎಂದು ಹೆಸರಿಟ್ಟಳು.

34ಲೇಯಾ ಮತ್ತೆ ಬಸುರಾಗಿ ಮತ್ತೊಬ್ಬ ಗಂಡು ಮಗನನ್ನು ಹೆತ್ತಳು. ಆಕೆ ತನ್ನೊಳಗೆ, ''ಖಂಡಿತವಾಗಿಯೂ ನನ್ನ ಗಂಡ ನನ್ನ ಜೊತೆಗೂಡಿರುವನು. ನಾನು ಅವನಿಗೆ ಮೂರು ಗಂಡು ಮಕ್ಕಳನ್ನು ಕೊಟ್ಟಿರುವೆ'' ಎಂದು ಹೇಳಿ ಆ ಮಗುವಿಗೆ ಲೇವಿ* ಎಂದು ಹೆಸರಿಟ್ಟಳು.

35ನಂತರ ಲೇಯಾ ಮತ್ತೊಬ್ಬ ಗಂಡು ಮಗನನ್ನು ಹೆತ್ತಳು. ಲೇಯಳು ತನ್ನೊಳಗೆ, ''ಈಗ ನಾನು ಯೆಹೋವನನ್ನು ಸ್ತುತಿಸುವೆನು'' ಎಂದು ಹೇಳಿ ಆ ಮಗುವಿಗೆ ಯೆಹೂದ* ಎಂದು ಹೆಸರಿಟ್ಟಳು. ನಂತರ ಲೇಯಾಳಿಗೆ ಮಕ್ಕಳಾಗುವುದು ನಿಂತುಹೋಯಿತು.

30 ರಾಹೇಲಳು ತನಗೆ ಮಕ್ಕಳಾಗದಿರುವುದನ್ನು ಗಮನಿಸಿದಳು. ರಾಹೇಲಳಿಗೆ ತನ್ನ ಅಕ್ಕನಾದ ಲೇಯಾಳ ಮೇಲೆ ಹೊಟ್ಟೆಕಿಚ್ಚಾಯಿತು. ಆದ್ದರಿಂದ ರಾಹೇಲಳು ಯಾಕೋಬನಿಗೆ, ''ನನಗೆ ಮಕ್ಕಳನ್ನು ಕೊಡು, ಇಲ್ಲವಾದರೆ ನಾನು ಸಾಯುವೆ'' ಎಂದು ಹೇಳಿದಳು.

2ಯಾಕೋಬನಿಗೆ ರಾಹೇಲಳ ಮೇಲೆ ಕೋಪವಾಯಿತು. ಅವನು ಆಕೆಗೆ, ''ನಾನು ದೇವರಲ್ಲ ನಿನಗೆ ಮಕ್ಕಳಾಗದಂತೆ ಮಾಡಿರುವವನು ದೇವರು'' ಎಂದು ಹೇಳಿದನು.

3ನಂತರ ರಾಹೇಲಳು, ''ನೀನು ನನ್ನ ಸೇವಕಿಯಾದ ಬಿಲ್ಹಾಳನ್ನು ತೆಗೆದುಕೊಳ್ಳಬಹುದು. ಆಕೆಯೊಡನೆ ಮಲಗಿಕೊ; ಆಕೆ ನನಗೋಸ್ಕರ ಒಂದು ಮಗುವನ್ನು ಹೆರುವಳು. ಆಗ ನಾನು ಆಕೆಯ ಮೂಲಕ ತಾಯಿಯಾಗುವೆನು'' ಎಂದು ಹೇಳಿದಳು.

4ಅಂತೆಯೇ ರಾಹೇಲಳು ಬಿಲ್ಹಾಳನ್ನು ತನ್ನ ಗಂಡನಾದ ಯಾಕೋಬನಿಗೆ ಕೊಟ್ಟಳು. ಯಾಕೋಬನು ಬಿಲ್ಹಾಳನ್ನು ಕೂಡಿದನು. 5ಬಿಲ್ಹಾ ಬಸುರಾಗಿ ಯಾಕೋಬನಿಗೆ ಒಬ್ಬ ಮಗನನ್ನು ಹೆತ್ತಳು.

6ರಾಹೇಲಳು, ''ದೇವರು ನನ್ನ ಪ್ರಾರ್ಥನೆಯನ್ನು ಕೇಳಿ ನನಗೆ ಒಬ್ಬ ಮಗನನ್ನು ಕೊಡಲು ನಿರ್ಧರಿಸಿದನು'' ಎಂದು ಹೇಳಿ ಆ ಮಗುವಿಗೆ ದಾನ್* ಎಂದು ಹೆಸರಿಟ್ಟಳು.

7ಬಿಲ್ಹಾ ಮತ್ತೆ ಬಸುರಾಗಿ ಯಾಕೋಬನಿಗೆ ಎರಡನೆ ಮಗನನ್ನು ಹೆತ್ತಳು. 8ರಾಹೇಲಳು, ''ನನ್ನ ಅಕ್ಕನೊಂದಿಗೆ ಕಷ್ಟಪಟ್ಟು ಹೋರಾಡಿ ಗೆದ್ದಿದ್ದೇನೆ'' ಎಂದು ಹೇಳಿ ಆ ಮಗುವಿಗೆ ನಫ್ತಾಲಿ* ಎಂದು ಹೆಸರಿಟ್ಟಳು.

9ಲೇಯಳು ತನಗೆ ಮಕ್ಕಳಾಗದಿರುವುದನ್ನು ಗಮನಿಸಿ ತನ್ನ ಸೇವಕಿಯಾದ ಜಿಲ್ಪಳನ್ನು ಯಾಕೋಬನಿಗೆ ಕೊಟ್ಟಳು. 10ಜಿಲ್ಪಳಿಗೂ ಒಬ್ಬ ಮಗನು ಹುಟ್ಟಿದನು. 11ಲೇಯಳು, ''ನಾನು ಅದೃಷ್ಟವಂತೆ'' ಎಂದು ಹೇಳಿ, ಆ ಮಗುವಿಗೆ ಗಾದ್* ಎಂದು ಹೆಸರಿಟ್ಟಳು. 12ಜಿಲ್ಪಳು ಮತ್ತೊಬ್ಬ ಮಗನನ್ನು ಹೆತ್ತಳು. ಲೇಯಳು,''ನಾನು ಧನ್ಯಳಾದೆ. 13ಈಗ ನನ್ನನ್ನು ಧನ್ಯಳೆಂದು ಕರೆಯುವರು'' ಎಂದು ಹೇಳಿ ಆ ಮಗುವಿಗೆ ಆಶೇರ್* ಎಂದು ಹೆಸರಿಟ್ಟಳು.

14ಗೋಧಿಯ ಸುಗ್ಗಿಕಾಲದಲ್ಲಿ, ರೂಬೇನನು ಹೊಲಕ್ಕೆ ಹೋಗಿದ್ದಾಗ ಕಾಮಜನಕಗಿಡದ ಹೂವುಗಳನ್ನು* ಕಂಡನು. ರೂಬೇನನು ಈ ಹೂವುಗಳನ್ನು ತನ್ನ ತಾಯಿಯಾದ ಲೇಯಳಿಗೆ ತಂದುಕೊಟ್ಟನು. ರಾಹೇಲಳು ಲೇಯಳಿಗೆ, ''ದಯವಿಟ್ಟು ,ನಿನ್ನ ಮಗನು ತಂದಿರುವ ಹೂವುಗಳಲ್ಲಿ ನನಗೆ ಸ್ವಲ್ಪಕೊಡು'' ಎಂದು ಕೇಳಿದಳು.

15ಲೇಯಳು, ''ನೀನು ಈಗಾಗಲೇ ನನ್ನ ಗಂಡನನ್ನು ತೆಗೆದುಕೊಂಡಿರುವೆ. ಈಗ ನನ್ನ ಮಗನು ತಂದಿರುವ ಹೂವುಗಳನ್ನು ತೆಗೆದುಕೊಳ್ಳಲು ಪ್ರಯತ್ನಿಸುತ್ತಿರುವೆ'' ಎಂದು ಹೇಳಿದಳು.

ರಾಹೇಲಳು, ''ನಿನ್ನ ಮಗನು ತಂದಿರುವ ಹೂವುಗಳನ್ನು ನನಗೆ ಕೊಟ್ಟರೆ, ನೀನು ಈ ರಾತ್ರಿ ಯಾಕೋಬನ ಸಂಗಡ ಮಲಗಿಕೊಳ್ಳಬಹುದು'' ಎಂದು ಹೇಳಿದಳು.

16ಆ ರಾತ್ರಿ ಯಾಕೋಬನು ಹೊಲದಿಂದ ಬಂದನು. ಲೇಯಳು ಅವನನ್ನು ಕಂಡು ಭೇಟಿಯಾಗಲು ಹೋದಳು. ಅವಳು ಅವನಿಗೆ, ''ಈ ರಾತ್ರಿ ನೀನು ನನ್ನ ಸಂಗಡ ಮಲಗಿಕೊಳ್ಳುವೆ. ನನ್ನ ಮಗನು ತಂದ ಹೂವುಗಳನ್ನು ನಾನು ನಿನಗೋಸ್ಕರವಾಗಿ ಕೊಟ್ಟಿರುವೆ'' ಎಂದು

---

**ರೂಬೇನ್** ಈ ಪದದ ಅರ್ಥ: ''ನೋಡು, ಮಗನು!''

**ಸಿಮೆಯೋನ್** ಈ ಪದದ ಅರ್ಥ: ''ಆತನು ಕೇಳುತ್ತಾನೆ.''

**ಲೇವಿ** ಈ ಪದದ ಅರ್ಥ: ''ಜೊತೆಗೂಡಿ,'' ''ಒಂದಾಗಿರು'' ಅಥವಾ ''ಸಮೀಪಸ್ಥನಾಗು.''

**ಯೆಹೂದ** ಈ ಪದದ ಅರ್ಥ: ''ಆತನಿಗೆ ಸ್ತೋತ್ರ.''

**ದಾನ್** ಇದರರ್ಥ: ''ನಿರ್ಧರಿಸು'' ''ನ್ಯಾಯತೀರಿಸು.''

**ನಫ್ತಾಲಿ** ಈ ಪದದ ಅರ್ಥ: ''ನನ್ನ ಹೋರಾಟ.''

**ಗಾದ್** ಇದರರ್ಥ:''ಅದೃಷ್ಟವಂತ'' ಭಾಗ್ಯವಂತ.''

**ಆಶೇರ್** ಇದರರ್ಥ: ''ಸಂತೋಷ'' ''ಆಶೀರ್ವಾದಶಾಲಿ.''

**ಕಾಮಜನಕ ಗಿಡದ ಹೂವು** ಅಥವಾ ''ಮಾಂಡ್ರೆಕ್ಸ್'' ಹೀಬ್ರೂ ಪದದ ಅರ್ಥ ''ಪ್ರೇಮ ಗಿಡ'' ಸ್ತ್ರೀಯರು ಗರ್ಭದರಿಸಲು ಈ ಗಿಡಗಳು ಸಹಾಯಕರೆಂದು ಜನರು ನಂಬಿದ್ದರು.

ಹೇಳಿದಳು. ಆದ್ದರಿಂದ ಯಾಕೋಬನು ಆ ರಾತ್ರಿ ಲೇಯ
ಳೊಡನೆ ಮಲಗಿಕೊಂಡನು.
17ಲೇಯಳು ಮತ್ತೆ ಬಸುರಾಗುವಂತೆ ದೇವರು ಅನು
ಗ್ರಹಿಸಿದನು. ಆಕೆ ತನ್ನ ಐದನೆಯ ಮಗನನ್ನು ಹೆತ್ತಳು.
18ಲೇಯಳು, ‘‘ದೇವರು ನನಗೆ ಒಂದು ಬಹುಮಾನ
ವನ್ನು ಕೊಟ್ಟನು; ಯಾಕಂದರೆ ನಾನು ನನ್ನ ಸೇವಕಿಯನ್ನು
ನನ್ನ ಗಂಡನಿಗೆ ಕೊಟ್ಟೆನು’’ ಎಂದು ಹೇಳಿ, ಆ ಮಗುವಿಗೆ
ಇಸ್ಸಾಕಾರ್* ಎಂದು ಹೆಸರಿಟ್ಟಳು. 19ಲೇಯಳು ಮತ್ತೆ
ಬಸುರಾಗಿ ಆರನೆಯ ಮಗನನ್ನು ಹೆತ್ತಳು. 20ಲೇಯಳು,
‘‘ದೇವರು ನನಗೆ ಒಂದು ಒಳ್ಳೆಯ ಬಹುಮಾನವನ್ನು
ಕೊಟ್ಟಿದ್ದಾನೆ. ಈಗ ಖಂಡಿತವಾಗಿ ಯಾಕೋಬನು
ನನ್ನನ್ನು ಸ್ವೀಕರಿಸುವನು, ಯಾಕಂದರೆ ನಾನು ಅವನಿಗೆ
ಆರು ಗಂಡು ಮಕ್ಕಳನ್ನು ಕೊಟ್ಟಿರುವೆ’’ ಎಂದು ಹೇಳಿ ಆ
ಮಗುವಿಗೆ, ಜೆಬುಲೂನ್* ಎಂದು ಹೆಸರಿಟ್ಟಳು.
21ತರುವಾಯ ಲೇಯಳು ಒಬ್ಬ ಮಗಳನ್ನು ಹೆತ್ತಳು.
ಆಕೆ ತನ್ನ ಮಗಳಿಗೆ ದೀನಾ ಎಂದು ಹೆಸರಿಟ್ಟಳು.
22ನಂತರ, ದೇವರು ರಾಹೇಲಳ ಪ್ರಾರ್ಥನೆಯನ್ನು
ಕೇಳಿ ಆಕೆಗೆ ಮಕ್ಕಳಾಗುವಂತೆ ಅನುಗ್ರಹಿಸಿದನು.
23-24ರಾಹೇಲಳು ಬಸುರಾಗಿ ಒಬ್ಬ ಮಗನನ್ನು ಹೆತ್ತಳು.
ರಾಹೇಲಳು, ‘‘ದೇವರು ನನಗಿದ್ದ ಅವಮಾನವನ್ನು
ತೆಗೆದುಹಾಕಿದ್ದಾನೆ; ನನಗೆ ಒಬ್ಬ ಮಗನನ್ನು ಕೊಟ್ಟಿದ್ದಾನೆ’’
ಎಂದು ಹೇಳಿ ಆ ಮಗುವಿಗೆ ಯೋಸೇಫ* ಎಂದು
ಹೆಸರಿಟ್ಟಳು.

### ಯಾಕೋಬನು ಲಾಬಾನನಿಗೆ ಮೋಸ ಮಾಡಿದ್ದು

25ಯೋಸೇಫನು ಹುಟ್ಟಿದ ಮೇಲೆ, ಯಾಕೋಬನು
ಲಾಬಾನನಿಗೆ, ‘‘ಈಗ ನಾನು ನನ್ನ ಸ್ವಂತ ಮನೆಗೆ
ಹೋಗಲು ಅನುಮತಿಕೊಡು. 26ನನ್ನ ಹೆಂಡತಿಯರನ್ನೂ
ಮಕ್ಕಳನ್ನೂ ನನಗೆ ಕೊಡು. ನಾನು ಹದಿನಾಲ್ಕು ವರ್ಷ
ನಿನ್ನ ಸೇವೆಮಾಡಿ ಅವರನ್ನು ಸಂಪಾದಿಸಿಕೊಂಡಿದ್ದೇನೆ.
ನಾನು ನಿನಗೆ ಒಳ್ಳೆಯ ಸೇವೆ ಮಾಡಿರುವುದು ನಿನಗೆ
ತಿಳಿದಿದೆ’’ ಎಂದು ಹೇಳಿದನು.
27ಲಾಬಾನನು ಅವನಿಗೆ, ‘‘ನಾನು ಹೇಳುವುದನ್ನು
ಕೇಳು; ಯೆಹೋವನು ನಿನ್ನ ನಿಮಿತ್ತವಾಗಿ ನನ್ನನ್ನು ಆಶೀ
ರ್ವದಿಸಿದ್ದಾನೆಂದು ನನಗೆ ತಿಳಿದಿದೆ. 28ಹೇಳು, ನಾನು
ನಿನಗೆ ಎಷ್ಟು ಸಂಬಳ ಕೊಡಬೇಕು? ನೀನು ಹೇಳಿದಷ್ಟು
ಕೊಡುತ್ತೇನೆ’’ ಎಂದು ಹೇಳಿದನು.
29ಯಾಕೋಬನು, ‘‘ನಾನು ನಿನಗೋಸ್ಕರ ಕಷ್ಟಪಟ್ಟು
ಕೆಲಸ ಮಾಡಿರುವುದು ನಿನಗೆ ಗೊತ್ತಿದೆ. ನಾನು ನಿನ್ನ ಕುರಿ
ಮಂದೆಗಳನ್ನು ನೋಡಿಕೊಂಡಿದ್ದರಿಂದ ಅವು ಹೆಚ್ಚಾಗಿವೆ.
30ನಾನು ಬಂದಾಗ ನಿನಗೆ ಸ್ವಲ್ಪವಿತ್ತು. ಈಗ ನಿನಗೆ ಬೇಕಾ
ದಷ್ಟಿದೆ. ನಾನು ನಿನಗೋಸ್ಕರ ಮಾಡಿದ್ದನ್ನೆಲ್ಲ
ಯೆಹೋವನು ಆಶೀರ್ವದಿಸಿದನು. ನಾನು ನನಗೋಸ್ಕರ
ಕೆಲಸ ಮಾಡುವ ಸಮಯವಿದು. ನನ್ನ ಸ್ವಂತ ಮನೆಗೆ ಒದಗಿ
ಸುವ ಸಮಯವಿದು’’ ಎಂದು ಹೇಳಿದನು.
31ಲಾಬಾನನು ‘‘ಹಾಗಾದರೆ ನಾನು ನಿನಗೇನು ಕೊಡ
ಬೇಕು’’ ಎಂದು ಕೇಳಿದನು.
ಯಾಕೋಬನು, ‘‘ನೀನು ನನಗೆ ಏನೂ ಕೊಡ
ಬೇಕಾಗಿಲ್ಲ. (ನಾನುಕೆಲಸ ಮಾಡಿದ್ದಕ್ಕೆ ನೀನು ಸಂಬಳ
ಕೊಟ್ಟರೆ ಸಾಕು.) ಇದೊಂದು ಕಾರ್ಯವನ್ನು ಮಾಡು;
ನಾನು ಹೋಗಿ ನಿನ್ನ ಕುರಿಗಳನ್ನು ನೋಡಿಕೊಳ್ಳುವೆ.
32ನಾನು ನಿನ್ನ ಕುರಿಮಂದೆಯೊಳಗೆ ಹೋಗಿ, ಚುಕ್ಕೆ
ಮಚ್ಚೆಗಳಿರುವ ಪ್ರತಿಯೊಂದು ಕುರಿಯನ್ನೂ ಪ್ರತಿ
ಯೊಂದು ಕಪ್ಪು ಕುರಿಯನ್ನೂ ಚುಕ್ಕೆಮಚ್ಚೆಗಳಿರುವ ಪ್ರತಿ
ಯೊಂದು ಮೇಕೆಯನ್ನೂ ತೆಗೆದುಕೊಳ್ಳುವೆನು. ಅದೇ
ನನಗೆ ಸಂಬಳ. 33ಮುಂದಿನ ದಿನಗಳಲ್ಲಿ ನೀನು ಬಂದು
ಪರೀಕ್ಷಿಸಿದಾಗ ನಾನು ಯಥಾರ್ಥನೊ ಇಲ್ಲವೊ ಎಂಬು
ದನ್ನು ನೀನು ಸುಲಭವಾಗಿ ಕಂಡುಕೊಳ್ಳಬಹುದು. ನಾನೇ
ನಾದರೂ ಚುಕ್ಕೆಯಿಲ್ಲದ ಮೇಕೆಗಳನ್ನಾಗಲಿ ಅಥವಾ
ಕಪ್ಪಿಲ್ಲದ ಕುರಿಗಳನ್ನಾಗಲಿ ಹೊಂದಿದ್ದರೆ, ನಾನು ಅದನ್ನು
ಕದ್ದುಕೊಂಡದ್ದೆಂದು ನೀನು ಪರಿಗಣಿಸಬಹುದು’’
ಎಂದು ಹೇಳಿದನು.
34ಲಾಬಾನನು, ‘‘ನಾನು ಅದಕ್ಕೆ ಒಪ್ಪಿಕೊಂಡಿದ್ದೇನೆ.
ನೀನು ಹೇಳಿದಂತೆ ನಾವು ಮಾಡೋಣ’’ ಎಂದು ಹೇಳಿ
ದನು. 35ಆ ದಿನ ಲಾಬಾನನು ಚುಕ್ಕೆಗಳಿದ್ದ ಎಲ್ಲಾ ಹೋತ
ಗಳನ್ನೂ ಮೇಕೆಗಳನ್ನು ಕಪ್ಪಾದ ಕುರಿಗಳನ್ನೂ ಪ್ರತ್ಯೇಕಿ
ಸಿದನು. ಲಾಬಾನನು ತನ್ನ ಗಂಡು ಮಕ್ಕಳಿಗೆ ಆ ಕುರಿ
ಗಳನ್ನು ನೋಡಿಕೊಳ್ಳಲು ಹೇಳಿದನು. 36ಆದ್ದರಿಂದ
ಅವನ ಗಂಡು ಮಕ್ಕಳು ಚುಕ್ಕೆಗಳಿದ್ದ ಅವುಗಳೊಂದಿಗೆ
ಮತ್ತೊಂದು ಸ್ಥಳಕ್ಕೆ ಹೋದರು. ಅವರು ಮೂರು ದಿನ
ಗಳವರೆಗೆ ಪ್ರಯಾಣ ಮಾಡಿದರು. ಯಾಕೋಬನು
ಅಲ್ಲಿದ್ದುಕೊಂಡು ಉಳಿದವುಗಳನ್ನೆಲ್ಲ ನೋಡಿಕೊಳ್ಳ
ತೊಡಗಿದನು.
37ಆದ್ದರಿಂದ ಯಾಕೋಬನು ಲಿಬ್ನೆ, ಲೂಜು ಮತ್ತು
ಅರ್ಮೋನ್ ಎಂಬ ಮರಗಳಿಂದ ಹಸಿರುಕೊಂಬೆಗಳನ್ನು
ಕತ್ತರಿಸಿದನು. ಅವುಗಳನ್ನು ಪಟ್ಟಿಪಟ್ಟಿಯಾಗಿ ತೊಗಟೆ
ಸುಲಿದು ಅವುಗಳಲ್ಲಿರುವ ಬಿಳುಪುಬಣ್ಣವು ಕಾಣಿಸುವಂತೆ
ಮಾಡಿದನು. 38ಯಾಕೋಬನು ಆ ಕೊಂಬೆಗಳನ್ನು
ಮಂದೆಗಳ ಎದುರಿಗೆ ನೀರು ಕುಡಿಯುವ ಸ್ಥಳದಲ್ಲಿಟ್ಟನು.

---

**ಇಸ್ಸಾಕಾರ್** ಇದರರ್ಥ: ‘‘ಪ್ರತಿಫಲ’’ ‘‘ಸಂಬಳ.’’

**ಜೆಬೂಲೂನ್** ಇದರರ್ಥ: ‘‘ಸ್ತೋತ್ರ’’ ಅಥವಾ ‘‘ಸನ್ಮಾನ.’’

**ಯೋಸೇಫ** ಇದರರ್ಥ: ‘‘ಸೇರಿಸು’’ ‘‘ಸಂಗ್ರಹಿಸು’’ ಅಥವಾ ’’ಒಟ್ಟುಗೂಡಿಸು.’’

ಪ್ರಾಣಿಗಳು ನೀರು ಕುಡಿಯುವುದಕ್ಕೆ ಬಂದಾಗ ಆ ಸ್ಥಳ
ದಲ್ಲಿ ಸಂಗಮ ಮಾಡುತ್ತಿದ್ದವು. 39ಮೇಕೆಗಳು ಆ ಕೊಂಬೆ
ಗಳ ಎದುರಿನಲ್ಲಿ ಸಂಗಮ ಮಾಡಿದಾಗ, ಅವುಗಳಲ್ಲಿ
ಹುಟ್ಟಿದ ಮರಿಗಳೆಲ್ಲ ಚುಕ್ಕೆಮಚ್ಚೆಗಳಿಂದಲೂ ಕಪ್ಪು
ಬಣ್ಣದಿಂದಲೂ ಕೂಡಿದ್ದವು.

40ಯಾಕೋಬನು ಚುಕ್ಕೆಯುಳ್ಳ ಮತ್ತು ಕಪ್ಪಾಗಿರುವ
ಆಡುಕುರಿಗಳನ್ನು ಮಂದೆಯ ಇತರ ಆಡುಕುರಿಗಳಿಂದ
ಬೇರ್ಪಡಿಸಿದನು. ಯಾಕೋಬನು ತನ್ನ ಪಶುಗಳನ್ನು
ಲಾಬಾನನ ಪಶುಗಳಿಂದ ಪ್ರತ್ಯೇಕವಾಗಿರಿಸಿದನು. 41ಬಲ
ವಾದ ಆಡುಕುರಿಗಳು ಸಂಗಮ ಮಾಡುವಾಗಲೆಲ್ಲ
ಯಾಕೋಬನು ಆ ಕೊಂಬೆಗಳನ್ನು ಅವುಗಳ ಕಣ್ಣಿಗೆ ಎದು
ರಾಗಿಡುತ್ತಿದ್ದನು. ಅವುಗಳು ಆ ಕೊಂಬೆಗಳ ಸಮೀಪದಲ್ಲಿ
ಸಂಗಮ ಮಾಡುತ್ತಿದ್ದವು. 42ಆದರೆ ಬಲಹೀನವಾದ
ಪ್ರಾಣಿಗಳು ಸಂಗಮ ಮಾಡುವಾಗ ಯಾಕೋಬನು ಆ
ಕೊಂಬೆಗಳನ್ನು ಅಲ್ಲಿ ಇಡುತ್ತಿರಲಿಲ್ಲ. ಆದ್ದರಿಂದ ಬಲ
ಹೀನವಾದ ಆಡುಕುರಿಗಳಿಗೆ ಹುಟ್ಟಿದ ಮರಿಗಳೆಲ್ಲ
ಲಾಬಾನನಿಗೆ ಸೇರಿಕೊಂಡವು. ಬಲವಾದ ಆಡುಕುರಿಗ
ಳಿಗೆ ಹುಟ್ಟಿದ ಮರಿಗಳೆಲ್ಲ ಯಾಕೋಬನಿಗೆ ಸೇರಿ
ಕೊಂಡವು. 43ಹೀಗೆ ಯಾಕೋಬನು ತುಂಬ ಐಶ್ವರ್ಯ
ವಂತನಾದನು. ಅವನಿಗೆ ದೊಡ್ಡ ಮಂದೆಗಳಿದ್ದವು; ಅನೇಕ
ಸೇವಕರಿದ್ದರು; ಒಂಟೆಗಳಿದ್ದವು ಮತ್ತು ಕತ್ತೆಗಳಿದ್ದವು.

## ಯಾಕೋಬನ ಪಲಾಯನ

31 ಒಂದು ದಿನ ಲಾಬಾನನ ಗಂಡು ಮಕ್ಕಳು ಮಾತಾ
ಡುತ್ತಿರುವುದನ್ನು ಯಾಕೋಬನು ಕೇಳಿಸಿ
ಕೊಂಡನು. ಅವರು, ‘‘ನಮ್ಮ ತಂದೆ ಹೊಂದಿದ್ದ ಪ್ರತಿ
ಯೊಂದನ್ನೂ ಯಾಕೋಬನು ತೆಗೆದುಕೊಂಡು ಐಶ್ವ
ರ್ಯವಂತನಾಗಿದ್ದಾನೆ; ಅವನು ನಮ್ಮ ತಂದೆಯ ಐಶ್ವ
ರ್ಯವನ್ನೆಲ್ಲ ತೆಗೆದುಕೊಂಡಿದ್ದಾನೆ’’ ಎಂದು ಹೇಳುತ್ತಿ
ದ್ದರು. 2ಲಾಬಾನನು ಮೊದಲಿನಂತೆ ಸ್ನೇಹದಿಂದ ಇಲ್ಲದಿ
ರುವುದನ್ನು ಸಹ ಯಾಕೋಬನು ಗಮನಿಸಿದನು.
3ಯೆಹೋವನು ಯಾಕೋಬನಿಗೆ, ‘‘ನಿನ್ನ ಪೂರ್ವಿಕರು
ವಾಸಿಸಿದ ನಿನ್ನ ಸ್ವಂತ ಸ್ಥಳಕ್ಕೆ ಹಿಂತಿರುಗಿ ಹೋಗು. ನಾನು
ನಿನ್ನ ಸಂಗಡವಿರುತ್ತೇನೆ’’ ಎಂದು ಹೇಳಿದನು.

4ಆದ್ದರಿಂದ ಯಾಕೋಬನು ರಾಹೇಲಳಿಗೆ ಮತ್ತು
ಲೇಯಾಳಿಗೆ ತನ್ನ ಆಡುಕುರಿಗಳು ಮೇಯುತ್ತಿರುವ
ಹೊಲದಲ್ಲಿ ತನ್ನನ್ನು ಭೇಟಿಯಾಗಬೇಕೆಂದು ಹೇಳಿದನು.
5ಯಾಕೋಬನು, ರಾಹೇಲಳಿಗೆ ಮತ್ತು ಲೇಯಾಳಿಗೆ,
‘‘ನಿಮ್ಮ ತಂದೆ ನನ್ನ ಮೇಲೆ ಕೋಪದಿಂದಿರುವುದನ್ನು
ನಾನು ಗಮನಿಸಿದ್ದೇನೆ. ಮೊದಲು ಅವನು ನನ್ನೊಂದಿಗೆ
ಸ್ನೇಹದಿಂದಿದ್ದನು. ಆದರೆ ಈಗ ಅವನು ಸ್ನೇಹದಿಂದಿಲ್ಲ.
ಆದರೆ ನನ್ನ ತಂದೆಯ ದೇವರು ನನ್ನೊಂದಿಗಿದ್ದಾನೆ.
6ನಿಮ್ಮಿಬ್ಬರಿಗೂ ತಿಳಿದಿರುವಂತೆ, ನಾನು ನಿಮ್ಮ ತಂದೆಗಾಗಿ
ನನ್ನಿಂದಾದಷ್ಟು ಕಷ್ಟಪಟ್ಟು ದುಡಿದಿದ್ದೇನೆ. 7ಆದರೆ ನಿಮ್ಮ
ತಂದೆ ನನಗೆ ಮೋಸ ಮಾಡಿದನು. ನಿಮ್ಮ ತಂದೆ ನನ್ನ
ಸಂಬಳವನ್ನು ಹತ್ತು ಸಲ ಬದಲಾಯಿಸಿದನು. ಆದರೆ ಆ
ಸಮಯದಲ್ಲೆಲ್ಲ ದೇವರು ನನ್ನನ್ನು ಲಾಬಾನನ ಎಲ್ಲಾ
ಮೋಸಗಳಿಂದ ಕಾಪಾಡಿದನು.

8‘‘ಒಂದು ಸಲ ಲಾಬಾನನು, ‘ಚುಕ್ಕೆಯಿರುವ ಆಡು
ಕುರಿಗಳನ್ನೆಲ್ಲ ನೀನು ಇಟ್ಟುಕೊಳ್ಳಬಹುದು. ಇದೇ ನಿನಗೆ
ಸಂಬಳ’ ಎಂದು ಹೇಳಿದನು. ಅವನು ಹೀಗೆ ಹೇಳಿದ
ಮೇಲೆ ಎಲ್ಲಾ ಆಡುಕುರಿಗಳು ಚುಕ್ಕೆಯಿರುವ ಮರಿಗ
ಳನ್ನು ಈಯ್ದವು. ಆದ್ದರಿಂದ ಅವೆಲ್ಲ ನನ್ನದಾದವು. ಆಗ
ಲಾಬಾನನು, ‘ನಾನು ಚುಕ್ಕೆಯಿರುವ ಆಡುಕುರಿಗಳನ್ನು
ತೆಗೆದುಕೊಳ್ಳುವೆ. ನೀನು ಮಚ್ಚೆಯಿರುವ ಆಡುಕುರಿ
ಗಳನ್ನು ತೆಗೆದುಕೊಳ್ಳಬಹುದು. ಅದೇ ನಿನಗೆ ಸಂಬಳ’
ಎಂದು ಹೇಳಿದನು. ಅವನು ಹೀಗೆ ಹೇಳಿದ ಮೇಲೆ, ಎಲ್ಲಾ
ಆಡುಕುರಿಗಳು ಮಚ್ಚೆಯಿರುವ ಮರಿಗಳನ್ನು ಈಯ್ದವು.
9ಹೀಗೆ ದೇವರು ನಿಮ್ಮ ತಂದೆಯಿಂದ ಆಡುಕುರಿಗಳನ್ನು
ತೆಗೆದುಕೊಂಡು ಅವುಗಳನ್ನು ನನಗೆ ಕೊಟ್ಟನು.

10‘‘ಪ್ರಾಣಿಗಳು ಸಂಗಮಿಸುವಾಗ ನನಗೆ ಒಂದು ಕನ
ಸಾಯಿತು. ಸಂಗಮಿಸುತ್ತಿದ್ದ ಹೋತಗಳೆಲ್ಲ ಚುಕ್ಕೆಗಳನ್ನು
ಮತ್ತು ಮಚ್ಚೆಗಳನ್ನು ಹೊಂದಿದ್ದವು. 11ದೇವದೂತನು ಕನ
ಸಿನಲ್ಲಿ ನನ್ನ ಜೊತೆ ಮಾತಾಡಿ ‘ಯಾಕೋಬನೇ’ ಎಂದು
ಕರೆದನು.

‘‘ನಾನು ‘ಇಗೋ ಇದ್ದೇನೆ’ ಎಂದು ಉತ್ತರಿಸಿದೆ.

12‘‘ದೇವದೂತನು ನನಗೆ, ‘ನೋಡು ಚುಕ್ಕೆಮಚ್ಚೆಗಳಿ
ರುವ ಆಡುಕುರಿಗಳು ಮಾತ್ರ ಸಂಗಮಿಸುತ್ತವೆ. ಹೀಗಾಗು
ವಂತೆ ನಾನೇ ಮಾಡಿರುವೆನು. ನಿನಗೆ ಲಾಬಾನನು ಮಾಡು
ತ್ತಿರುವ ಅನ್ಯಾಯಗಳನ್ನೆಲ್ಲ ನಾನು ನೋಡಿರುವೆನು. ಆದ್ದ
ರಿಂದ ಹುಟ್ಟುವ ಮರಿಗಳೆಲ್ಲ ನಿನ್ನದಾಗುವಂತೆ ನಾನೇ
ಮಾಡಿದ್ದೇನೆ. 13ಬೇತೇಲಿನಲ್ಲಿ ನಿನ್ನ ಬಳಿಗೆ ಬಂದಿದ್ದ
ದೇವರು ನಾನೇ. ಆ ಸ್ಥಳದಲ್ಲಿ ನೀನು ಒಂದು ಯಜ್ಞ
ವೇದಿಕೆಯನ್ನು ಕಟ್ಟಿದೆ. ನೀನು ಯಜ್ಞವೇದಿಕೆಯ ಮೇಲೆ
ಆಲಿವ್ ಎಣ್ಣೆಯನ್ನು ಸುರಿದು ನನಗೆ ಒಂದು ಪ್ರಮಾಣ
ವನ್ನು ಮಾಡಿದೆ. ಈಗ ನೀನು ನಿನ್ನ ಹುಟ್ಟುಸ್ಥಳಕ್ಕೆ
ಹಿಂತಿರುಗಿ ಹೋಗಬೇಕೆಂಬುದು ನನ್ನ ಅಪೇಕ್ಷೆ’ ಎಂದು
ತಿಳಿಸಿದನು’’’ ಎಂಬುದಾಗಿ ಹೇಳಿದನು.

14-15ರಾಹೇಲಳು ಮತ್ತು ಲೇಯಳು ಯಾಕೋಬನಿಗೆ,
‘‘ನಮ್ಮ ತಂದೆ ಸಾಯುವಾಗ ನಮಗೆ ಕೊಡಲು ಅವ ನಲ್ಲಿ
ಏನೂ ಇಲ್ಲ. ಅವನು ನಮ್ಮನ್ನು ಅನ್ಯರಂತೆ ಕಂಡನು;
ಅವನು ನಮ್ಮನ್ನು ನಿನಗೆ ಮಾರಿದ್ದಾನೆ; ನಮ್ಮ ಐಶ್ವರ್ಯ
ವನ್ನೆಲ್ಲ ಅವನು ಉಪಯೋಗಿಸಿದನು. 16ದೇವರು ಈ
ಐಶ್ವರ್ಯವನ್ನೆಲ್ಲ ನಮ್ಮ ತಂದೆಯಿಂದ ತೆಗೆದು

ಕೊಂಡಿದ್ದಾನೆ. ಈಗ ಅದು ನಮಗೂ ನಮ್ಮ ಮಕ್ಕಳಿಗೂ
ಸೇರಿದೆ. ಆದ್ದರಿಂದ ದೇವರು ನಿನಗೆ ಹೇಳಿದಂತೆಯೇ
ಮಾಡು'' ಅಂದರು.

17ಆದ್ದರಿಂದ ಯಾಕೋಬನು ತನ್ನ ಪ್ರಯಾಣಕ್ಕಾಗಿ
ಸಿದ್ಧತೆಮಾಡಿದನು. ಅವನು ತನ್ನ ಗಂಡು ಮಕ್ಕಳನ್ನು ಮತ್ತು
ಹೆಂಡತಿಯರನ್ನು ಒಂಟೆಗಳ ಮೇಲೆ ಕುಳ್ಳಿರಿಸಿದನು.
18ನಂತರ ಅವರೆಲ್ಲರು, ಯಾಕೋಬನ ತಂದೆ ವಾಸಿಸಿದ
ಸ್ಥಳವಾದ ಕಾನಾನಿಗೆ ಮರಳಿ ಪ್ರಯಾಣ ಬೆಳೆಸಿದರು.
ಯಾಕೋಬನು ಹೊಂದಿದ್ದ ಎಲ್ಲಾ ಆಡುಕುರಿಗಳ ಮಂದೆ
ಗಳು ಅವರ ಮುಂದೆ ನಡೆದವು. ಅವನು ಪದ್ದನ್ ಅರಾಮಿ
ನಲ್ಲಿದ್ದಾಗ ಹೊಂದಿಕೊಂಡಿದ್ದ ಪ್ರತಿಯೊಂದನ್ನೂ ಅವರು
ತೆಗೆದುಕೊಂಡು ಹೋದರು.

19ಆ ಸಮಯದಲ್ಲಿ ಲಾಬಾನನು ತನ್ನ ಕುರಿಗಳ ಉಣ್ಣೆ
ಯನ್ನು ಕತ್ತರಿಸಲು ಹೋಗಿದ್ದನು. ಅವನು ಇಲ್ಲದಿದ್ದಾಗ,
ರಾಹೇಲಳು ಅವನ ಮನೆಯೊಳಗೆ ಹೋಗಿ, ತನ್ನ ತಂದೆಯ
ವಿಗ್ರಹಗಳನ್ನು ಕದ್ದುಕೊಂಡಳು.

20ಅರಾಮ್ಯನಾದ ಲಾಬಾನನಿಗೆ ಯಾಕೋಬನು
ಹೇಳದೆ ಮೋಸ ಮಾಡಿದನು. ತಾವು ಹೋಗುತ್ತಿರುವು
ದಾಗಿ ಯಾಕೋಬನು ಅವನಿಗೆ ತಿಳಿಸಲಿಲ್ಲ.
21ಯಾಕೋಬನು ತನ್ನ ಕುಟುಂಬವನ್ನು ಕರೆದುಕೊಂಡು,
ತನ್ನ ಪ್ರತಿಯೊಂದು ಸ್ವತ್ತನ್ನು ತೆಗೆದುಕೊಂಡು ಬೇಗನೆ
ಅಲ್ಲಿಂದ ಹೊರಟನು. ಅವರು ಯೂಫ್ರೇಟೀಸ್ ನದಿ
ದಾಟಿ, ಬೆಟ್ಟಗಳ ಸೀಮೆಯಿಂದ ಗಿಲ್ಯಾದ್ ದೇಶದ ಕಡೆಗೆ
ಪ್ರಯಾಣ ಮಾಡಿದರು.

22ಯಾಕೋಬನು ಓಡಿಹೋದದ್ದು ಮೂರು ದಿನಗ
ಳಾದ ಮೇಲೆ ಲಾಬಾನನಿಗೆ ತಿಳಿಯಿತು. 23ಆದ್ದರಿಂದ
ಲಾಬಾನನು ತನ್ನ ಜನರನ್ನು ಕರೆದುಕೊಂಡು
ಯಾಕೋಬನನ್ನು ಬೆನ್ನಟ್ಟಿದನು. ಏಳು ದಿನಗಳಾದ
ಮೇಲೆ ಲಾಬಾನನು ಯಾಕೋಬನನ್ನು ಬೆಟ್ಟದ ಸೀಮೆ
ಯಾದ ಗಿಲ್ಯಾದಿನಲ್ಲಿ ಕಂಡನು. 24ಆ ರಾತ್ರಿ ದೇವರು
ಲಾಬಾನನಿಗೆ ಕನಸಿನಲ್ಲಿ ಕಾಣಿಸಿಕೊಂಡು, ''ಎಚ್ಚರಿಕೆ
ಯಾಗಿರು; ನೀನು ಯಾಕೋಬನಿಗೆ ಹೇಳುವ ಪ್ರತಿ
ಯೊಂದು ಮಾತಿನ ಬಗ್ಗೆ ಎಚ್ಚರಿಕೆಯಾಗಿರು'' ಎಂದು
ಹೇಳಿದನು.

### ಕದ್ದುಕೊಂಡು ಬಂದಿದ್ದ ವಿಗ್ರಹಗಳಿಗಾಗಿ ಹುಡುಕಾಟ

25ಮರುದಿನ ಮುಂಜಾನೆ ಲಾಬಾನನು ಯಾಕೋಬ
ನನ್ನು ಸಂಧಿಸಿದನು. ಯಾಕೋಬನು ಬೆಟ್ಟದ ಮೇಲೆ
ಪಾಳೆಯ ಮಾಡಿಕೊಂಡಿದ್ದನು. ಆದ್ದರಿಂದ ಲಾಬಾನನು
ಮತ್ತು ಅವನ ಜನರೆಲ್ಲರು ಬೆಟ್ಟದ ಸೀಮೆಯಾದ ಗಿಲ್ಯಾದಿ
ನಲ್ಲಿ ಪಾಳೆಯ ಮಾಡಿಕೊಂಡರು. 26ಲಾಬಾನನು
ಯಾಕೋಬನಿಗೆ, ''ನೀನು ನನಗೇಕೆ ಮೋಸ ಮಾಡಿದೆ?
ಯುದ್ಧದಲ್ಲಿ ಸೆರೆಹಿಡಿಯುವ ಸ್ತ್ರೀಯರಂತೆ, ನೀನು ನನ್ನ
ಹೆಣ್ಣುಮಕ್ಕಳನ್ನು ಕರೆದುಕೊಂಡು ಬಂದದ್ದೇಕೆ?
27ನೀನು ನನಗೆ ಹೇಳದೆ ಓಡಿಬಂದದ್ದೇಕೆ? ನೀನು
ನನ್ನನ್ನು ಕೇಳಿದ್ದರೆ ನಾನು ನಿನಗಾಗಿ ಒಂದು ಔತಣ ಕೂಟ
ವನ್ನೇರ್ಪಡಿಸುತ್ತಿದ್ದೆ. ಅಲ್ಲಿ ಗಾಯನ, ನೃತ್ಯ ಮತ್ತು ವಾದ್ಯ
ಗೋಷ್ಠಿಗಳಿರುತ್ತಿದ್ದವು. 28ನಾನು ನನ್ನ ಮೊಮ್ಮಕ್ಕಳಿಗೆ
ಮುದ್ದಿಡುವುದಕ್ಕೂ ನನ್ನ ಹೆಣ್ಣು ಮಕ್ಕಳನ್ನು ಬೀಳ್ಕೊಡು
ವುದಕ್ಕೂ ನೀನು ನನಗೆ ಅವಕಾಶಕೊಡಲಿಲ್ಲ. ನಿನ್ನ
ಮೂಢತನದಿಂದ ಹೀಗೆ ಮಾಡಿರುವೆ. 29ನಿನಗೆ ಕೇಡು
ಮಾಡಲು ನನಗೆ ಶಕ್ತಿಯಿದೆ. ಆದರೆ ಕಳೆದರಾತ್ರಿ ನಿನ್ನ
ತಂದೆಯ ದೇವರು ಕನಸಿನಲ್ಲಿ ನನಗೆ ಕಾಣಿಸಿಕೊಂಡು,
ನಿನಗೆ ಕೇಡು ಮಾಡಕೂಡದೆಂದು ನನಗೆ ಎಚ್ಚರಿಕೆ
ಕೊಟ್ಟನು. 30ನೀನು ನಿನ್ನ ಮನೆಗೆ ಹಿಂತಿರುಗಿ ಹೋಗ
ಬೇಕೆಂಬುದು ನಿನ್ನ ಅಪೇಕ್ಷೆ ಎಂದು ನನಗೆ ತಿಳಿದಿದೆ. ಆದ್ದ
ರಿಂದಲೇ ನೀನು ಹೊರಟು ಬಂದೆ. ಆದರೆ ನೀನು ನನ್ನ
ಮನೆಯಿಂದ ವಿಗ್ರಹಗಳನ್ನು ಕದ್ದುಕೊಂಡು ಬಂದ
ದ್ದೇಕೆ?'' ಎಂದು ಹೇಳಿದನು.

31ಯಾಕೋಬನು, ''ನಾನು ನಿನಗೆ ಹೇಳದೆ ಹೊರಟು
ಬಂದೆ. ಯಾಕಂದರೆ ನನಗೆ ಭಯವಾಗಿತ್ತು; ನೀನು ನಿನ್ನ
ಹೆಣ್ಣುಮಕ್ಕಳನ್ನು ನನ್ನಿಂದ ತೆಗೆದುಕೊಳ್ಳಬಹುದೆಂದು
ನಾನು ಭಾವಿಸಿದೆ. 32ಆದರೆ ನಾನು ನಿನ್ನ ವಿಗ್ರಹಗಳನ್ನು
ಕದ್ದುಕೊಳ್ಳಲಿಲ್ಲ. ನಿನ್ನ ವಿಗ್ರಹಗಳನ್ನು ತೆಗೆದುಕೊಂಡಿ
ರುವ ಯಾವ ವ್ಯಕ್ತಿಯನ್ನಾದರೂ ಇಲ್ಲಿ ಕಂಡರೆ ಆ ವ್ಯಕ್ತಿ
ಯನ್ನು ಕೊಲ್ಲಲಾಗುವುದು. ನಿನ್ನ ಜನರೇ ನನಗೆ ಸಾಕ್ಷಿ
ಗಳು. ನಿನಗೆ ಸೇರಿದ ಏನಾದರೂ ಇದೆಯೋ ಎಂದು
ನೀನೇ ನೋಡಬಹುದು. ನಿನಗೆ ಸೇರಿದ ಯಾವುದಾ
ದರೂ ಇದ್ದರೆ ತೆಗೆದುಕೋ'' ಎಂದು ಹೇಳಿದನು.
(ಲಾಬಾನನ ವಿಗ್ರಹಗಳನ್ನು ರಾಹೇಲಳು ಕದ್ದುಕೊಂಡಿ
ರುವುದು ಯಾಕೋಬನಿಗೆ ತಿಳಿದಿರಲಿಲ್ಲ.)

33ಆದ್ದರಿಂದ ಲಾಬಾನನು ಹೋಗಿ ಯಾಕೋಬನ
ಪಾಳೆಯದಲ್ಲಿಯೂ ಗುಡಾರದಲ್ಲಿಯೂ ಲೇಯಳ
ಗುಡಾರದಲ್ಲಿಯೂ ಹುಡುಕಿದನು. ಬಳಿಕ ಇಬ್ಬರು
ಸೇವಕಿಯರಿದ್ದ ಗುಡಾರಕ್ಕೂ ಹೋಗಿ ಹುಡುಕಿದನು;
ಅಲ್ಲಿಯೂ ಅವನಿಗೆ ಅವನ ವಿಗ್ರಹಗಳು ಸಿಕ್ಕಲಿಲ್ಲ.
ಅಲ್ಲಿಂದ ರಾಹೇಲಳ ಗುಡಾರಕ್ಕೆ ಹೋದನು.
34ರಾಹೇಲಳು ಆ ವಿಗ್ರಹಗಳನ್ನು ತನ್ನ ಒಂಟೆಯ ಸಬರ
ದೊಳಗಿಟ್ಟು ಅದರ ಮೇಲೆ ಕುಳಿತುಕೊಂಡಿದ್ದಳು.
ಲಾಬಾನನು ಇಡೀ ಗುಡಾರವನ್ನು ಹುಡುಕಿದರೂ ತನ್ನ
ವಿಗ್ರಹಗಳನ್ನು ಕಂಡುಕೊಳ್ಳಲಿಲ್ಲ. 35ಆಗ ರಾಹೇಲಳು ತನ್ನ
ತಂದೆಗೆ, ''ಅಪ್ಪಾ, ನನ್ನ ಮೇಲೆ ಕೋಪಗೊಳ್ಳಬೇಡ. ನಿನ್ನ
ಮುಂದೆ ನಿಂತುಕೊಳ್ಳಲು ನನಗೆ ಸಾಧ್ಯವಿಲ್ಲ ಯಾಕಂದರೆ
ನಾನು ಮುಟ್ಟಾಗಿದ್ದೇನೆ'' ಎಂದು ಹೇಳಿದಳು.

ಲಾಬಾನನು ಪಾಳೆಯದಲ್ಲೆಲ್ಲಾ ಹುಡುಕಿದರೂ ತನ್ನ
ವಿಗ್ರಹಗಳನ್ನು ಕಂಡುಕೊಳ್ಳಲಾಗಲಿಲ್ಲ.
36 ಆಗ ಯಾಕೋಬನು ತುಂಬಾ ಕೋಪಗೊಂಡು,
''ನಾನು ಯಾವ ತಪ್ಪು ಮಾಡಿದೆ? ಯಾವ ನಿಯಮವನ್ನು
ನಾನು ಉಲ್ಲಂಘಿಸಿರುವೆ? ನನ್ನನ್ನು ಬೆನ್ನಟ್ಟಿಕೊಂಡು
ಬಂದು ತಡೆಯಲು ನಿನಗೆ ಯಾವ ಹಕ್ಕಿದೆ?
37 ನಾನು ಹೊಂದಿರುವ ಪ್ರತಿಯೊಂದನ್ನು ನೀನು ಪರೀ
ಕ್ಷಿಸಿ ನೋಡಿದರೂ ನಿನಗೆ ಸೇರಿರುವ ಯಾವುದೂ ನಿನಗೆ
ಸಿಕ್ಕಲಿಲ್ಲ. ನಿನಗೆ ಅಂಥದ್ದೇನಾದರೂ ಸಿಕ್ಕಿದರೆ ತೋರಿಸು.
ನನ್ನ ಜನರಿಗೆಲ್ಲ ಕಾಣಿಸುವಂತೆ ಅದನ್ನು ಇಲ್ಲಿಡು. ನಮ್ಮಲ್ಲಿ
ಯಾರು ಸರಿಯಾದವರೆಂದು ನಮ್ಮ ಜನರೇ ನಿರ್ಣಯಿ
ಸಲಿ. 38 ನಾನು ನಿನಗೋಸ್ಕರ ಇಪ್ಪತ್ತು ವರ್ಷ ದುಡಿದೆ. ಆ
ಸಮಯದಲ್ಲೆಲ್ಲ, ಯಾವ ಕುರಿಮರಿಯಾಗಲೀ ಆಡಾ
ಗಲೀ ಹುಟ್ಟುವಾಗ ಸಾಯಲಿಲ್ಲ; ನಿನ್ನ ಮಂದೆಗಳಲ್ಲಿನ
ಯಾವ ಟಗರನ್ನಾಗಲೀ ನಾನು ತಿಂದುಬಿಡಲಿಲ್ಲ.
39 ಕ್ರೂರ ಮೃಗಗಳು ಕುರಿಯನ್ನು ಕೊಂದಾಗಲೆಲ್ಲಾ
ಅದಕ್ಕೆ ಬದಲಾಗಿ ನನ್ನ ಕುರಿಯನ್ನು ನಿನಗೆ ಕೊಟ್ಟೆನು.
ಸತ್ತುಹೋದ ಪಶುವನ್ನು ನಿನ್ನ ಮುಂದೆ ತಂದು, 'ಇದು
ನನ್ನ ತಪ್ಪಲ್ಲ' ಎಂದು ನಿನಗೆ ಹೇಳಲಿಲ್ಲ. ಕಳುವು ಹಗಲ
ಲ್ಲಾಗಿದ್ದರೂ ರಾತ್ರಿಯಲ್ಲಾಗಿದ್ದರೂ ಕಳುವಾದ ಪಶುಗ
ಳಿಗೆ ಪ್ರತಿಯಾಗಿ ಪಶುಗಳನ್ನು ನೀನು ನನ್ನಿಂದ ವಸೂಲಿ
ಮಾಡಿದೆ. 40 ಹಗಲಿನಲ್ಲಿ ಸೂರ್ಯನಿಂದ ನನ್ನ ಶಕ್ತಿಯನ್ನು
ಕುಂದಿಸಿದೆ; ರಾತ್ರಿಯಲ್ಲಿ ಚಳಿಯಿಂದ ನನಗೆ ನಿದ್ರೆಯು
ಬರಲಿಲ್ಲ. 41 ನಾನು ಇಪ್ಪತ್ತು ವರ್ಷ ನಿನಗೆ ಗುಲಾಮನಂತೆ
ಸೇವೆ ಮಾಡಿದೆನು. ಮೊದಲ ಹದಿನಾಲ್ಕು ವರ್ಷಗಳಲ್ಲಿ
ನಿನ್ನ ಇಬ್ಬರು ಹೆಣ್ಣು ಮಕ್ಕಳನ್ನು ಪಡೆದುಕೊಳ್ಳುವುದಕ್ಕಾಗಿ
ದುಡಿದೆನು. ಕಡೆಯ ಆರು ವರ್ಷಗಳಲ್ಲಿ ನಿನ್ನ ಪಶುಗಳನ್ನು
ಪಡೆದುಕೊಳ್ಳುವುದಕ್ಕಾಗಿ ದುಡಿದೆನು. ಆ ಅವಧಿಯಲ್ಲಿ
ನೀನು ನನ್ನ ಸಂಬಳನ್ನು ಹತ್ತು ಸಲ ಬದಲಾಯಿಸಿದೆ.
42 ಆದರೆ ನನ್ನ ಪೂರ್ವಿಕರ ದೇವರೂ ಅಬ್ರಹಾಮನ
ದೇವರೂ ಇಸಾಕನು ಭಯಪಡುವ ದೇವರೂ* ನನ್ನ
ಸಂಗಡವಿದ್ದನು. ದೇವರು ನನ್ನ ಜೊತೆಯಲ್ಲಿ ಇಲ್ಲದಿದ್ದರೆ
ನೀನು ನನ್ನನ್ನು ಬರಿಗೈಲಿ ಕಳುಹಿಸಿಬಿಡುತ್ತಿದ್ದೆ. ಆದರೆ ನನ್ನ
ಕಷ್ಟವನ್ನೂ ನಾನು ಮಾಡಿದ ಕೆಲಸವನ್ನೂ ದೇವರು
ನೋಡಿದನು. ನಿನ್ನೆಯ ರಾತ್ರಿ ನಾನು ತಪ್ಪಿತಸ್ಥನಲ್ಲವೆಂದು
ದೇವರು ನಿನಗೆ ತೋರಿಸಿಕೊಟ್ಟಿದ್ದಾನೆ'' ಎಂದು
ಹೇಳಿದನು.

## ಯಾಕೋಬ ಮತ್ತು ಲಾಬಾನರ ಒಪ್ಪಂದ

43 ಲಾಬಾನನು ಯಾಕೋಬನಿಗೆ, ''ಈ ಸ್ತ್ರೀಯರು ನನ್ನ
ಮಕ್ಕಳು. ಅವರ ಮಕ್ಕಳು ನನಗೆ ಸೇರಿದವರು; ಈ ಪಶು
ಗಳು ನನ್ನವು. ನೀನು ಇಲ್ಲಿ ನೋಡುವ ಪ್ರತಿಯೊಂದೂ
ನನಗೆ ಸೇರಿದ್ದು. ಆದರೆ ನನ್ನ ಹೆಣ್ಣುಮಕ್ಕಳನ್ನಾಗಲೀ
ಅವರ ಮಕ್ಕಳನ್ನಾಗಲೀ ತೆಗೆದುಕೊಳ್ಳಲು ಸಾಧ್ಯವಿಲ್ಲ.
44 ಆದ್ದರಿಂದ ನಿನ್ನೊಡನೆ ಒಂದು ಒಪ್ಪಂದ ಮಾಡಿ
ಕೊಳ್ಳಲು ಸಿದ್ಧನಾಗಿದ್ದೇನೆ. ನಮಗೆ ಒಪ್ಪಂದಕ್ಕೆ ಸಾಕ್ಷಿ
ಯಾಗಿ ಕಲ್ಲುಗಳ ಒಂದು ಕುಪ್ಪೆಯನ್ನು ಮಾಡೋಣ''
ಎಂದು ಹೇಳಿದನು.
45 ಅಂತೆಯೇ ಯಾಕೋಬನು ಮಾಡಿಕೊಂಡ
ಒಪ್ಪಂದಕ್ಕೆ ಸಾಕ್ಷಿಯಾಗಿ ಒಂದು ದೊಡ್ಡ ಕಲ್ಲನ್ನು ತೆಗೆದು
ಕೊಂಡು ಬಂದು ಅಲ್ಲಿಟ್ಟನು. 46 ಅವನು ತನ್ನ ಜನರಿಗೆ
ಮತ್ತಷ್ಟು ಕಲ್ಲುಗಳನ್ನು ತೆಗೆದುಕೊಂಡು ಬಂದು ಕಲ್ಲಿನ
ಕುಪ್ಪೆ ಮಾಡುವಂತೆ ಹೇಳಿದನು. ಬಳಿಕ ಅವರು ಆ
ಕುಪ್ಪೆಯ ಬಳಿಯಲ್ಲಿ ಊಟಮಾಡಿದರು. 47 ಲಾಬಾನನು
ಆ ಸ್ಥಳಕ್ಕೆ ಯಗರ್ ಸಾಹದೂತ* ಎಂದು ಹೆಸರಿಟ್ಟನು.
ಆದರೆ ಯಾಕೋಬನು ಆ ಸ್ಥಳಕ್ಕೆ ಗಲೀದ್* ಎಂದು
ಹೆಸರಿಟ್ಟನು.
48 ಲಾಬಾನನು ಯಾಕೋಬನಿಗೆ, ''ಈ ಕಲ್ಲುಗಳ
ಕುಪ್ಪೆಯು ನಮ್ಮಿಬ್ಬರಿಗೂ ನಮ್ಮ ಒಪ್ಪಂದವನ್ನು ಜ್ಞಾಪಕಕ್ಕೆ
ತರುತ್ತದೆ'' ಎಂದು ಹೇಳಿದನು. ಆದಕಾರಣ ಯಾಕೋ
ಬನು ಆ ಸ್ಥಳಕ್ಕೆ ಗಲೀದ್ ಎಂದು ಹೆಸರಿಟ್ಟನು.
49 ಲಾಬಾನನು, ''ನಾವು ಒಬ್ಬರನ್ನೊಬ್ಬರು ಅಗಲಿರು
ವಾಗ ಯೆಹೋವನೇ ನಮ್ಮನ್ನು ನೋಡಿಕೊಳ್ಳಲಿ'' ಎಂದು
ಹೇಳಿದನು. ಆದ್ದರಿಂದ ಆ ಸ್ಥಳಕ್ಕೆ ಮಿಚ್ಪಾ* ಎಂದೂ
ಹೆಸರಿಡಲಾಯಿತು.
50 ಆಮೇಲೆ ಲಾಬಾನನು ''ನೀನು ನನ್ನ ಹೆಣ್ಣು
ಮಕ್ಕಳನ್ನು ನೋಯಿಸಿದರೆ, ದೇವರು ನಿನ್ನನ್ನು ದಂಡಿಸು
ವನು ಎಂಬುದನ್ನು ನೆನಪು ಮಾಡಿಕೊ. ನೀನು ಬೇರೆ ಸ್ತ್ರೀ
ಯರನ್ನು ಮದುವೆ ಮಾಡಿಕೊಂಡರೆ, ದೇವರು ನಿನ್ನನ್ನು
ನೋಡುತ್ತಿದ್ದಾನೆ ಎಂಬುದನ್ನು ನೆನಪು ಮಾಡಿಕೊ..
51 ನಮ್ಮಿಬ್ಬರ ಮಧ್ಯದಲ್ಲಿ ನಾನಿಟ್ಟಿರುವ ಈ ಕಲ್ಲುಗಳು
ಇಲ್ಲಿವೆ; ನಾವು ಒಪ್ಪಂದ ಮಾಡಿಕೊಂಡಿದ್ದೇವೆ ಎಂಬು
ದನ್ನು ಸೂಚಿಸುವ ವಿಶೇಷವಾದ ಕಲ್ಲೂ ಇಲ್ಲಿದೆ. 52 ಈ
ಕಲ್ಲುಗಳ ಕುಪ್ಪೆಯೂ ವಿಶೇಷವಾದ ಈ ಕಲ್ಲೂ ನಮ್ಮ
ಒಪ್ಪಂದವನ್ನು ನೆನಪುಮಾಡಿಕೊಳ್ಳಲು ನಮ್ಮಿಬ್ಬರಿಗೂ
ಸಹಾಯ ಮಾಡುತ್ತವೆ. ನಾನು ನಿನಗೆ ವಿರೋಧವಾಗಿ
ಹೋರಾಡುವುದಕ್ಕಾಗಿ ಈ ಕಲ್ಲುಗಳನ್ನು ದಾಟಿ ಬರುವು
ದಿಲ್ಲ. ನೀನು ನನಗೆ ವಿರೋಧವಾಗಿ ಈ ಕಲ್ಲುಗಳನ್ನು

**ಭಯಪಡುವ ದೇವರು** ದೇವರ ಒಂದು ಹೆಸರು.

**ಯಗರ್ ಸಾಹದೂತ್** ಅರ್ಯಮೇಯಿಕ್ ಭಾಷೆಯ ಈ ಪದಗಳ ಅರ್ಥ: ''ಒಡಂಬಡಿಕೆಯ ಕಲ್ಲಿನ ಗುಡ್ಡೆ.''

**ಗಲೀದ್** ಇನ್ನೊಂದು ಹೆಸರು ಗಿಲ್ಯಾದ್ ಈ ಹಿಬ್ರೂ ಪದದ ಅರ್ಥ: ''ಒಡಂಬಡಿಕೆಯ ಕಲ್ಲಿನ ಗುಡ್ಡೆ.''

**ಮಿಚ್ಪಾ** ಇದರರ್ಥ: ''ನೋಡಲು ಯೋಗ್ಯವಾದ ಸ್ಥಳ.''

ದಾಟಿ ನನ್ನ ಕಡೆಗೆ ಬರಕೂಡದು. 53ನಾವು ಈ ಒಪ್ಪಂದ
ವನ್ನು ಮುರಿದುಹಾಕಿದರೆ, ನಮ್ಮಲ್ಲಿ ಅಪರಾಧಿಗೆ ಅಬ್ರಹಾ
ಮನ ದೇವರು, ನಾಹೋರನ ದೇವರು ಮತ್ತು ಅವರ
ಪೂರ್ವಿಕರ ದೇವರು ನ್ಯಾಯತೀರಿಸಲಿ'' ಎಂದು
ಹೇಳಿದನು.

ಅದೇ ರೀತಿಯಲ್ಲಿ ಯಾಕೋಬನು ತನ್ನ ತಂದೆಯಾದ
ಇಸಾಕನು ಭಯಭಕ್ತಿಯಿಂದ ಸೇವೆಮಾಡುವ ದೇವರ
ಮೇಲೆ ಆಣೆಯಿಟ್ಟು ಪ್ರಮಾಣಮಾಡಿದನು. 54ಆಮೇಲೆ
ಯಾಕೋಬನು ಒಂದು ಪಶುವನ್ನು ಕೊಂದು ಅದನ್ನು
ಬೆಟ್ಟದ ಮೇಲೆ ಯಜ್ಞವಾಗಿ ಅರ್ಪಿಸಿದನು; ತನ್ನ ಜನರನ್ನು
ಊಟಕ್ಕೆ ಆಹ್ವಾನಿಸಿದನು. ಅವರು ಊಟ ಮಾಡಿದ
ಮೇಲೆ , ಆ ರಾತ್ರಿ ಬೆಟ್ಟದ ಮೇಲೆ ಇದ್ದರು. 55ಮರುದಿನ
ಮುಂಜಾನೆ ಲಾಬಾನನು ತನ್ನ ಮೊಮ್ಮಕ್ಕಳಿಗೂ ಹೆಣ್ಣು
ಮಕ್ಕಳಿಗೂ ಮುದ್ದಿಟ್ಟು ಆಶೀರ್ವದಿಸಿ ತನ್ನ ಮನೆಗೆ
ಹಿಂತಿರುಗಿದನು.

### ಏಸಾವನೊಂದಿಗೆ ಮತ್ತೆ ಒಂದಾದದ್ದು

32 ಯಾಕೋಬನು ಅಲ್ಲಿಂದ ಹೊರಟು ಪ್ರಯಾಣ
ಮಾಡುತ್ತಿರುವಾಗ ದೇವದೂತರನ್ನು ನೋಡಿ
ದನು. 2ಆದ್ದರಿಂದ ಅವನು, ''ಇದು ದೇವರ ಪಾಳೆಯ''
ಎಂದು ಹೇಳಿ 'ಮಹನಯಿಮ್' * ಎಂದು ಹೆಸರಿಟ್ಟನು.

3ಯಾಕೋಬನ ಅಣ್ಣನಾದ ಏಸಾವನು ಸೇಯೀರ್
ಎಂಬ ಸ್ಥಳದಲ್ಲಿ ವಾಸವಾಗಿದ್ದನು. ಈ ಸ್ಥಳವು ಎದೋಮಿನ
ಗುಡ್ಡಗಾಡು ಪ್ರದೇಶವಾಗಿತ್ತು. ಯಾಕೋಬನು ತನ್ನ
ಸಂದೇಶಕರ ಮೂಲಕ 4ಏಸಾವನಿಗೆ ಈ ಸಂಗತಿಗಳನ್ನು
ತಿಳಿಸಿದನು: ''ನಿನ್ನ ಸೇವಕನಾದ ಯಾಕೋಬನು ಹೇಳು
ವುದೇನೆಂದರೆ,'ನಾನು ಕಳೆದ ವರ್ಷಗಳೆಲ್ಲಾ ಲಾಬಾನ
ನೊಡನೆ ಜೀವಿಸಿದೆನು. 5ನನಗೆ ಅನೇಕ ದನಗಳೂ, ಕತ್ತೆ
ಗಳೂ, ಆಡುಕುರಿಗಳೂ ಮತ್ತು ಸೇವಕ ಸೇವಕಿಯರೂ
ಇದ್ದಾರೆ. ಸ್ವಾಮೀ, ನೀವು ನಮ್ಮನ್ನು ಸ್ವೀಕರಿಸಿಕೊಳ್ಳ
ಬೇಕೆಂದು ಕೇಳಿಕೊಳ್ಳುತ್ತಿದ್ದೇನೆ.'''

6ಸಂದೇಶಕರು ಯಾಕೋಬನ ಬಳಿಗೆ ಹಿಂತಿರುಗಿ
ಬಂದು, ''ನಾವು ನಿನ್ನ ಅಣ್ಣನಾದ ಏಸಾವನ ಬಳಿಗೆ
ಹೋದೆವು. ಅವನು ನಿನ್ನನ್ನು ಭೇಟಿಯಾಗಲು ಬರು
ತ್ತಿದ್ದಾನೆ. ಅವನೊಡನೆ ನಾನೂರು ಮಂದಿ ಗಂಡಸ
ರಿದ್ದಾರೆ'' ಎಂದು ಹೇಳಿದರು.

7ಯಾಕೋಬನಿಗೆ ಭಯವಾಯಿತು. ಅವನು ತನ್ನೊ
ಡನೆ ಇದ್ದ ಜನರನ್ನು ಎರಡು ಗುಂಪುಗಳನ್ನಾಗಿ ವಿಂಗಡಿಸಿ
ದನು. ಅವನು ಎಲ್ಲಾ ಆಡುಕುರಿಗಳನ್ನೂ ದನಕರುಗ
ಳನ್ನೂ ಒಂಟೆಗಳನ್ನೂ ಎರಡು ಗುಂಪುಗಳನ್ನಾಗಿ ವಿಂಗಡಿ
ಸಿದನು. 8''ಒಂದುವೇಳೆ ಏಸಾವನು ಬಂದು ಒಂದು
ಗುಂಪನ್ನು ನಾಶಗೊಳಿಸಿದರೆ, ಮತ್ತೊಂದು ಗುಂಪು ಓಡಿ
ಹೋಗಿ ತಪ್ಪಿಸಿಕೊಳ್ಳಬಹುದು'' ಎಂಬುದು ಅವನ
ಆಲೋಚನೆಯಾಗಿತ್ತು.

9ಯಾಕೋಬನು, ''ನನ್ನ ತಂದೆಯಾದ ಅಬ್ರಹಾಮನ
ದೇವರೇ, ನನ್ನ ತಂದೆಯಾದ ಇಸಾಕನ ದೇವರೇ,
ಯೆಹೋವನೇ, ನನ್ನ ದೇಶಕ್ಕೆ ಮತ್ತು ನನ್ನ ಕುಟುಂಬಕ್ಕೆ
ಹಿಂತಿರುಗಿ ಬರುವಂತೆ ನೀನು ಹೇಳಿದೆ. ನೀನು ನನಗೆ
ಒಳ್ಳೆಯದನ್ನು ಮಾಡುವುದಾಗಿ ಹೇಳಿದೆ.10ನೀನು ನನಗೆ
ತುಂಬ ಕರುಣೆ ತೋರಿದೆ. ನೀನು ನನಗೆ ಅನೇಕ ಒಳ್ಳೆಯ
ಕಾರ್ಯಗಳನ್ನು ಮಾಡಿದೆ. ಮೊದಲನೆ ಸಲ ನಾನು
ಜೋರ್ಡನ್ ನದಿಯನ್ನು ದಾಟಿ ಪ್ರಯಾಣ ಮಾಡಿದಾಗ,
ಕೇವಲ ನನ್ನ ಊರುಗೋಲೇ ಹೊರತು ಬೇರೇನೂ
ನನಗಿರಲಿಲ್ಲ. ಆದರೆ ಈಗ ಎರಡು ಗುಂಪುಗಳಿಗೆ ಬೇಕಾದ
ವಸ್ತುಗಳನ್ನು ನಾನು ಪಡೆದಿದ್ದೇನೆ. 11ಇಂತಿರಲು, ದಯ
ವಿಟ್ಟು ನನ್ನ ಅಣ್ಣನಿಂದ ನನ್ನನ್ನು ಕಾಪಾಡಬೇಕೆಂದು
ನಿನ್ನನ್ನು ಬೇಡಿಕೊಳ್ಳುತ್ತಿರುವೆ. ಏಸಾವನಿಂದ ನನ್ನನ್ನು
ಕಾಪಾಡು. ಅವನು ಬಂದು ನಮ್ಮೆಲ್ಲರನ್ನೂ ತಾಯಂದಿ
ರನ್ನೂ ಮಕ್ಕಳನ್ನೂ ಕೊಲ್ಲುವನೆಂಬ ಭಯ ನನಗಿದೆ.
12'ನಾನು ನಿನಗೆ ಒಳ್ಳೆಯದನ್ನು ಮಾಡುವೆ. ನಾನು ನಿನ್ನ
ಕುಟುಂಬವನ್ನು ಹೆಚ್ಚಿಸಿ ನಿನ್ನ ಮಕ್ಕಳನ್ನು ಸಮುದ್ರದ
ಮರಳಿನಷ್ಟು ವೃದ್ಧಿಗೊಳಿಸುವೆನು. ಅವರು ಲೆಕ್ಕಿಸಲಾಗ
ದಷ್ಟು ಅಸಂಖ್ಯಾತವಾಗಿರುವರು' ಎಂದು ನೀನು ನನಗೆ
ವಾಗ್ದಾನ ಮಾಡಿದಿಯಲ್ಲವೇ'' ಎಂದು ಪ್ರಾರ್ಥಿಸಿದನು.

13ಯಾಕೋಬನು ಆ ರಾತ್ರಿ ಅಲ್ಲಿಯೇ ಉಳಿದು
ಕೊಂಡು ಏಸಾವನಿಗೆ ಉಡುಗೊರೆಯಾಗಿ ಕೊಡಲು
ಕೆಲವು ವಸ್ತುಗಳನ್ನು ಸಿದ್ಧಗೊಳಿಸಿದನು.
14ಯಾಕೋಬನು ಇನ್ನೂರು ಮೇಕೆಗಳನ್ನು ಇಪ್ಪತ್ತು
ಹೋತಗಳನ್ನು ಇನ್ನೂರು ಕುರಿಗಳನ್ನು ಮತ್ತು ಇಪ್ಪತ್ತು
ಟಗರುಗಳನ್ನು ತೆಗೆದುಕೊಂಡನು. 15ಯಾಕೋಬನು
ಮೂವತ್ತು ಒಂಟೆಗಳನ್ನು ಮತ್ತು ಅವುಗಳ ಮರಿಗಳನ್ನು,
ನಲವತ್ತು ಹಸುಗಳನ್ನು ಮತ್ತು ಹತ್ತು ಹೋರಿಗಳನ್ನು,
ಇಪ್ಪತ್ತು ಹೆಣ್ಣು ಕತ್ತೆಗಳನ್ನು ಮತ್ತು ಹತ್ತು ಗಂಡು ಕತ್ತೆ
ಗಳನ್ನು ತೆಗೆದುಕೊಂಡನು. 16ಯಾಕೋಬನು ಪಶುಗಳ
ಪ್ರತಿಯೊಂದು ಮಂದೆಯನ್ನೂ ತನ್ನ ಸೇವಕರ ವಶಕ್ಕೆ
ಕೊಟ್ಟನು. ಆಮೇಲೆ ಯಾಕೋಬನು ಸೇವಕರಿಗೆ, ''ಪಶು
ಗಳ ಪ್ರತಿಯೊಂದು ಗುಂಪನ್ನು ವಿಂಗಡಿಸಿ ನನ್ನ ಮುಂದೆ
ಹೋಗಿರಿ; ಅಲ್ಲದೆ ಪ್ರತಿಯೊಂದು ಮಂದೆಯ ನಡು
ವೆಯೂ ಸ್ವಲ್ಪ ಅಂತರವಿರಲಿ'' ಎಂದು ಹೇಳಿದನು.
17ಯಾಕೋಬನು ಅವರಿಗೆ ಅವರವರ ಕರ್ತವ್ಯಗಳನ್ನು
ತಿಳಿಸಿದನು. ಯಾಕೋಬನು ಪಶುಗಳ ಮೊದಲನೆ
ಗುಂಪಿನ ಸೇವಕನಿಗೆ, ''ನನ್ನ ಅಣ್ಣನಾದ ಏಸಾವನು ನಿನ್ನ
ಬಳಿಗೆ ಬಂದು, 'ಇವು ಯಾರ ಪಶುಗಳು? ನೀನು ಎಲ್ಲಿಗೆ

---

**ಮಹನಯಿಮ್** ಇದರ ಅರ್ಥ: ''ಎರಡು ಪಾಳೆಯಗಳು.''

ಹೋಗುತ್ತಿರುವೆ? ನೀನು ಯಾರ ಸೇವಕನು?' ಎಂದು
ಕೇಳುವನು. 18ಆಗ ನೀನು, 'ಪಶುಗಳು ನಿನ್ನ ಸೇವಕನಾದ
ಯಾಕೋಬನವು. ನನ್ನ ಒಡೆಯನಾದ ಏಸಾವನೇ,
ಯಾಕೋಬನು ಇವುಗಳನ್ನು ನಿನಗೆ ಉಡುಗೊರೆಯಾಗಿ
ಕಳುಹಿಸಿದ್ದಾನೆ. ಅಲ್ಲದೆ ಅವನು ಸಹ ನಮ್ಮ ಹಿಂದೆ ಬರು
ತ್ತಿದ್ದಾನೆ' ಎಂದು ತಿಳಿಸಬೇಕು'' ಎಂದು ಹೇಳಿದನು.
19ಇದೇ ರೀತಿ ಮಾಡುವಂತೆ ಯಾಕೋಬನು ಎರಡ
ನೆಯ ಸೇವಕನಿಗೆ, ಮೂರನೆಯ ಸೇವಕನಿಗೆ ಮತ್ತು ಉಳಿ
ದೆಲ್ಲಾ ಸೇವಕರಿಗೆ ಆಜ್ಞಾಪಿಸಿದನು. ಅವನು ಅವರಿಗೆ,
''ನೀವು ಏಸಾವನನ್ನು ಭೇಟಿಯಾದಾಗ ಇದೇ ರೀತಿ
ಮಾಡಬೇಕು. 20ನೀವು ಅವನಿಗೆ, 'ಇದು ನಿನಗೆ ಕಳುಹಿ
ಸಿರುವ ಉಡುಗೊರೆ. ಅಲ್ಲದೆ ನಿನ್ನ ಸೇವಕನಾದ
ಯಾಕೋಬನು ನಮ್ಮ ಹಿಂದೆ ಬರುತ್ತಿದ್ದಾನೆ' ಎಂದು
ಹೇಳಬೇಕು'' ಎಂದು ತಿಳಿಸಿದನು.
''ನಾನು ಈ ಜನರನ್ನು ಉಡುಗೊರೆಗಳೊಡನೆ ಮುಂದೆ
ಕಳುಹಿಸಿದರೆ, ಒಂದುವೇಳೆ ಏಸಾವನು ನನ್ನನ್ನು ಕ್ಷಮಿಸಿ
ನನ್ನನ್ನು ಸ್ವೀಕರಿಸಿಕೊಳ್ಳಬಹುದು'' ಎಂಬುದು ಯಾಕೋ
ಬನ ಆಲೋಚನೆಯಾಗಿತ್ತು. 21ಯಾಕೋಬನು ಏಸಾವ
ನಿಗೆ ಉಡುಗೊರೆಗಳನ್ನು ಕಳುಹಿಸಿ ಆ ರಾತ್ರಿ ಪಾಳೆಯದಲ್ಲಿ
ಉಳಿದುಕೊಂಡನು.
22ಆ ರಾತ್ರಿ, ಯಾಕೋಬನು ಎದ್ದು ತನ್ನ ಇಬ್ಬರು
ಹೆಂಡತಿಯರನ್ನೂ ತನ್ನ ಇಬ್ಬರು ದಾಸಿಯರನ್ನು ತನ್ನ
ಹನ್ನೊಂದು ಮಂದಿ ಗಂಡು ಮಕ್ಕಳನ್ನೂ ಕರೆದುಕೊಂಡು
ಹೊರಟು ಯಬ್ಬೋಕ್ ಹೊಳೆಯನ್ನು ದಾಟತಕ್ಕ ಸ್ಥಳಕ್ಕೆ
ಬಂದನು. 23ಯಾಕೋಬನು ತನ್ನ ಕುಟುಂಬದವರನ್ನೂ
ತನ್ನಲ್ಲಿದ್ದ ಪ್ರತಿಯೊಂದನ್ನು ಆಚೆದಡಕ್ಕೆ ಕಳುಹಿಸಿದನು.

## ದೇವರೊಡನೆ ಹೋರಾಟ

24ಎಲ್ಲರನ್ನೂ ಹೊಳೆ ದಾಟಿಸಿದ ಮೇಲೆ ಕೊನೆಯವ
ನಾಗಿ ತಾನೊಬ್ಬನೇ ಹೊಳೆದಾಟಲು ನಿಂತಿದ್ದಾಗ ಒಬ್ಬ
ಪುರುಷನು ಬಂದು ಸೂರ್ಯೋದಯದವರೆಗೂ
ಹೋರಾಡಿದನು. 25ಯಾಕೋಬನನ್ನು ಸೋಲಿಸಲು
ತನಗೆ ಸಾಧ್ಯವಾಗದಿರುವುದನ್ನು ಗಮನಿಸಿದ ಆ ಪುರುಷನು
ಯಾಕೋಬನ ತೊಡೆಯನ್ನು ಮುಟ್ಟಿದನು, ಆಗ
ಯಾಕೋಬನ ಕೀಲು ತಪ್ಪಿತು.
26ಆ ಪುರುಷನು ಯಾಕೋಬನಿಗೆ, ''ನನ್ನನ್ನು ಬಿಡು,
ಸೂರ್ಯೋದಯವಾಗುತ್ತಿದೆ'' ಎಂದು ಹೇಳಿದನು.
ಆದರೆ ಯಾಕೋಬನು, ''ನೀನು ನನ್ನನ್ನು ಆಶೀರ್ವದಿಸದ
ಹೊರತು ನಾನು ನಿನ್ನನು ಬಿಡುವುದಿಲ್ಲ'' ಎಂದು
ಹೇಳಿದನು. 27ಆ ಪುರುಷನು ಅವನಿಗೆ, ''ನಿನ್ನ ಹೆಸ
ರೇನು?'' ಎಂದು ಕೇಳಿದನು. ಅದಕ್ಕೆ ಯಾಕೋಬನು,
''ನನ್ನ ಹೆಸರು ಯಾಕೋಬ'' ಅಂದನು.
28ಆಗ ಆ ಪುರುಷನು, ''ಇನ್ನು ಮೇಲೆ ನಿನ್ನ ಹೆಸರು
'ಯಾಕೋಬ' ಎಂದಿರುವುದಿಲ್ಲ. ಇಂದಿನಿಂದ ನಿನ್ನ
ಹೆಸರು 'ಇಸ್ರೇಲ್'* ಎಂದಾಗುವುದು. ನಾನೇ ನಿನಗೆ
ಈ ಹೆಸರನ್ನು ಕೊಟ್ಟಿದ್ದೇನೆ; ಯಾಕಂದರೆ ನೀನು ದೇವ
ರೊಡನೆಯೂ ಮನುಷ್ಯರೊಡನೆಯೂ ಹೋರಾಡಿದೆ;
ಆದರೂ ನೀನು ಸೋಲಲಿಲ್ಲ'' ಎಂದು ಹೇಳಿದನು.
29ಯಾಕೋಬನು ಆತನಿಗೆ, ''ದಯವಿಟ್ಟು ನಿನ್ನ ಹೆಸ
ರನ್ನು ತಿಳಿಸು'' ಎಂದು ಕೇಳಿದನು. ಅದಕ್ಕೆ ಆ ಪುರುಷನು,
''ನನ್ನ ಹೆಸರನ್ನು ವಿಚಾರಿಸುವುದೇಕೆ?'' ಎಂದು ಹೇಳಿ
ಯಾಕೋಬನನ್ನು ಆಶೀರ್ವದಿಸಿದನು.
30ಆದ್ದರಿಂದ ಯಾಕೋಬನು, ''ಈ ಸ್ಥಳದಲ್ಲಿ ನಾನು
ದೇವರನ್ನು ಮುಖಾಮುಖಿಯಾಗಿ ನೋಡಿದರೂ ನನ್ನ
ಜೀವ ಉಳಿಯಿತು'' ಎಂದು ಹೇಳಿ ಆ ಸ್ಥಳಕ್ಕೆ
ಪೆನೀಯೇಲ್* ಎಂದು ಹೆಸರಿಟ್ಟನು. 31ಆಮೇಲೆ
ಅವನು ಪೆನೀಯೇಲ್‌ನಿಂದ ಹೊರಟು ಹೋಗುತ್ತಿರು
ವಾಗ ಸೂರ್ಯೋದಯವಾಯಿತು. ಯಾಕೋಬನು ತನ್ನ
ಕೀಲುನೋವಿನಿಂದ ಕುಂಟುತ್ತಾ ಹೋದನು. 32ಈ
ಮಾಂಸಖಂಡದಲ್ಲಿ ಯಾಕೋಬನಿಗೆ ನೋವು ಉಂಟಾಗಿ
ದ್ದರಿಂದ ಇಂದಿಗೂ ಇಸ್ರೇಲರು ತೊಡೆಯ ಕೀಲಿನ
ಮೇಲಿರುವ ಸೊಂಟದ ಮಾಂಸವನ್ನು ತಿನ್ನುವುದಿಲ್ಲ.

## ಯಾಕೋಬನು ತೋರಿದ ಧೈರ್ಯ

33 ಯಾಕೋಬನು ಕಣ್ಣೆತ್ತಿ ನೋಡಿದಾಗ
ಏಸಾವನು ನಾನೂರು ಜನರೊಂದಿಗೆ ಬರುವು
ದನ್ನು ಕಂಡನು. ಯಾಕೋಬನು ತನ್ನ ಕುಟುಂಬವನ್ನು
ನಾಲ್ಕು ಗುಂಪುಗಳಾಗಿ ವಿಂಗಡಿಸಿದನು. ಲೇಯಾ ಮತ್ತು
ಅವಳ ಮಕ್ಕಳು ಒಂದು ಗುಂಪಿನಲ್ಲಿದ್ದರು. ರಾಹೇಲಳು
ಮತ್ತು ಯೋಸೇಫನು ಇನ್ನೊಂದು ಗುಂಪಿನಲ್ಲಿದ್ದರು.
ಇಬ್ಬರು ದಾಸಿಯರು ಮತ್ತು ಅವರ ಮಕ್ಕಳು ಎರಡು
ಗುಂಪುಗಳಲ್ಲಿದ್ದರು. 2ಯಾಕೋಬನ ದಾಸಿಯರನ್ನು
ಮತ್ತು ಅವರ ಮಕ್ಕಳನ್ನು ಮುಂಭಾಗದಲ್ಲಿಯೂ ಲೇಯ
ಳನ್ನು ಮತ್ತು ಅವಳ ಮಕ್ಕಳನ್ನು ಅವರ ಹಿಂಭಾಗ
ದಲ್ಲಿಯೂ, ರಾಹೇಲಳನ್ನು ಮತ್ತು ಯೋಸೇಫನನ್ನು,
ಕೊನೆಯ ಸ್ಥಳದಲ್ಲೂ ಇರಿಸಿದನು.
3ಯಾಕೋಬನು ತಾನೇ ಮುಂದಾಗಿ ಏಸಾವನ ಬಳಿಗೆ
ನಡೆದುಹೋಗುತ್ತಾ ಏಳು ಸಲ ನೆಲದ ತನಕ ಬಗ್ಗಿ
ನಮಸ್ಕರಿಸಿದನು.

---

**ಇಸ್ರೇಲ್** ಇದರ ಅರ್ಥ, ''ಅವನು ದೇವರಿಗೋಸ್ಕರ ಹೋರಾಡುತ್ತಾನೆ'' ಅಥವಾ ''ಅವನು ದೇವರೊಂದಿಗೆ ಹೋರಾಡುತ್ತಾನೆ.''

**ಪೆನೀಯೇಲ್** ಅಥವಾ ಪೆನೂಯೇಲ್ ಈ ಹೆಸರಿನ ಎರಡು ಉಚ್ಚಾರಣೆಗಳೂ ಒಂದೇ ಅರ್ಥವನ್ನು ಕೊಡುತ್ತದೆ: ''ದೇವರ ಮುಖ.''

4ಏಸಾವನು ಯಾಕೋಬನನ್ನು ಕಂಡಾಗ, ಓಡಿಬಂದು
ತನ್ನ ಕೈಗಳಿಂದ ತಬ್ಬಿಕೊಂಡು ಅವನ ಕೊರಳಿನ ಮೇಲೆ
ಮುದ್ದಿಟ್ಟನು; ಅವರಿಬ್ಬರೂ ಕಣ್ಣೀರು ಸುರಿಸಿದರು.
5ಏಸಾವನು ಸ್ತ್ರೀಯರನ್ನು ಮತ್ತು ಮಕ್ಕಳನ್ನು ಕಣ್ಣೆತ್ತಿ
ನೋಡಿ, ''ನಿನ್ನೊಡನೆ ಇರುವ ಈ ಜನರು ಯಾರು?''
ಎಂದು ಕೇಳಿದನು.

ಯಾಕೋಬನು, ''ದೇವರು ನನಗೆ ಕೊಟ್ಟ ಮಕ್ಕಳೇ
ಇವರು. ದೇವರು ನನಗೆ ಒಳ್ಳೆಯವನಾಗಿದ್ದನು'' ಎಂದು
ಹೇಳಿದನು.

6ಆಮೇಲೆ ಇಬ್ಬರು ದಾಸಿಯರು ಮತ್ತು ಅವರೊಂದಿಗೆ
ಇದ್ದ ಮಕ್ಕಳು ಏಸಾವನ ಬಳಿಗೆ ಹೋಗಿ ಅವನಿಗೆ ತಲೆಬಾಗಿ
ನಮಸ್ಕರಿಸಿದನು. 7ಆಮೇಲೆ ಲೇಯಾ ಮತ್ತು ಅವ
ಳೊಂದಿಗೆ ಇದ್ದ ಮಕ್ಕಳು ಏಸಾವನ ಬಳಿಗೆ ಹೋಗಿ ತಲೆ
ಬಾಗಿ ನಮಸ್ಕರಿಸಿದರು. ತರುವಾಯ, ರಾಹೇಲಳು ಮತ್ತು
ಯೋಸೇಫನು ಏಸಾವನ ಬಳಿಗೆ ಹೋಗಿ ತಲೆಬಾಗಿ
ನಮಸ್ಕರಿಸಿದರು.

8ಏಸಾವನು, ''ನಾನು ಬರುತ್ತಿರುವಾಗ ಕಂಡ ಆ ಜನ
ರೆಲ್ಲಾ ಯಾರು? ಆ ಪಶುಗಳೆಲ್ಲಾ ಯಾತಕ್ಕೆ?'' ಎಂದು
ಕೇಳಿದನು.

ಯಾಕೋಬನು, ''ನೀನು ನನ್ನನ್ನು ಸ್ವೀಕರಿಸಿಕೊಳ್ಳಲಿ
ಎಂದು ಅವುಗಳನ್ನು ಉಡುಗೊರೆಗಳನ್ನಾಗಿ ಕಳುಹಿಸಿ
ಕೊಟ್ಟೆನು'' ಎಂದು ಹೇಳಿದನು.

9ಆದರೆ ಏಸಾವನು, ''ತಮ್ಮನೇ, ನೀನು ನನಗೆ ಉಡು
ಗೊರೆಗಳನ್ನು ಕೊಡಬೇಕಾಗಿಲ್ಲ, ನನಗೆ ಬೇಕಾದಷ್ಟಿದೆ''
ಎಂದು ಹೇಳಿದನು.

10ಯಾಕೋಬನು, ''ಇಲ್ಲ! ನಾನು ನಿನ್ನನ್ನು ಬೇಡಿ
ಕೊಳ್ಳುತ್ತೇನೆ; ನೀನು ನನ್ನನ್ನು ನಿಜವಾಗಿಯೂ ಸ್ವೀಕರಿಸಿ
ಕೊಳ್ಳುವುದಾದರೆ, ನಾನು ಕೊಡುವ ಉಡುಗೊರೆಗಳನ್ನು
ದಯವಿಟ್ಟು ಸ್ವೀಕರಿಸಬೇಕು. ನಿನ್ನ ಮುಖವನ್ನು ಮತ್ತೆ
ನೋಡಿ ನನಗೆ ತುಂಬ ಸಂತೋಷವಾಗಿದೆ. ದೇವರ ಮುಖ
ವನ್ನೇ ನೋಡಿದಂತಾಯಿತು. ನೀನು ನನ್ನನ್ನು ಸ್ವೀಕರಿಸಿ
ಕೊಂಡದ್ದರಿಂದ ನನಗೆ ತುಂಬ ಸಂತೋಷವಾಗಿದೆ.
11ಆದ್ದರಿಂದ ನಾನು ಕೊಡುವ ಈ ಉಡುಗೊರೆಗಳನ್ನು
ಸ್ವೀಕರಿಸಿಕೊಳ್ಳಬೇಕೆಂದು ಬೇಡಿಕೊಳ್ಳುತ್ತಿರುವೆ. ದೇವರು
ನನಗೆ ತುಂಬ ಒಳ್ಳೆಯವನಾಗಿದ್ದನು. ನನಗೆ ಬೇಕಾದದ್ದ
ಕ್ಕಿಂತಲೂ ಹೆಚ್ಚಾಗಿ ನನ್ನಲ್ಲಿದೆ'' ಎಂದು ಹೇಳಿದನು. ಹೀಗೆ
ಯಾಕೋಬನು ಉಡುಗೊರೆಗಳನ್ನು ತೆಗೆದುಕೊಳ್ಳುವಂತೆ
ಏಸಾವನನ್ನು ಬೇಡಿಕೊಂಡನು. ಆದ್ದರಿಂದ ಏಸಾವನು
ಉಡುಗೊರೆಗಳನ್ನು ಸ್ವೀಕರಿಸಿದನು.

12ಆಮೇಲೆ ಏಸಾವನು, ''ಈಗ ನೀನು ನಿನ್ನ ಪ್ರಯಾಣ
ವನ್ನು ಮುಂದುವರಿಸಬಹುದು. ನಾನು ನಿನ್ನ ಜೊತೆಯಲ್ಲಿ
ಬರುತ್ತೇನೆ'' ಎಂದು ಹೇಳಿದನು.

13ಆದರೆ ಯಾಕೋಬನು ಅವನಿಗೆ, ''ನನ್ನ ಮಕ್ಕಳು
ಬಲಹೀನರೆಂದು ನಿನಗೆ ಗೊತ್ತಿದೆ. ನಾನು ನನ್ನ ದನಕುರಿ
ಗಳನ್ನೂ ಅವುಗಳ ಮರಿಗಳನ್ನೂ ಎಚ್ಚರಿಕೆಯಿಂದ ನೋಡಿ
ಕೊಳ್ಳಬೇಕು. ಒಂದೇ ದಿನದಲ್ಲಿ ಬಹುದೂರದವರೆಗೆ ಎಡ
ಬಿಡದೆ ನಡೆಸಿಕೊಂಡು ಹೋದರೆ, ಎಲ್ಲಾ ಪಶುಗಳು ಸತ್ತು
ಹೋಗುತ್ತವೆ. 14ಆದ್ದರಿಂದ ನೀನು ಮುಂದಾಗಿ ಹೋಗು.
ನಾನು ನಿನ್ನನ್ನು ನಿಧಾನವಾಗಿ ಹಿಂಬಾಲಿಸುವೆನು. ದನ
ಕುರಿಗಳು ಮತ್ತು ಇತರ ಪಶುಗಳು ಸುರಕ್ಷಿತವಾಗಿರು
ವಂತೆಯೂ ನನ್ನ ಮಕ್ಕಳು ತುಂಬ ಆಯಾಸಗೊಳ್ಳ
ದಂತೆಯೂ ನಾನು ಸಾಕಷ್ಟು ನಿಧಾನವಾಗಿ ಬಂದು
ನಿನ್ನನ್ನು ಸೇಯೀರಿನಲ್ಲಿ ಭೇಟಿಯಾಗುವೆನು'' ಎಂದು
ಹೇಳಿದನು.

15ಅದಕ್ಕೆ ಏಸಾವನು, ''ಹಾಗಾದರೆ ನನ್ನ ಜನರಲ್ಲಿ ಕೆಲ
ವರನ್ನು ನಿನ್ನ ಸಹಾಯಕ್ಕಾಗಿ ಬಿಟ್ಟುಹೋಗುವೆನು''
ಎಂದು ಹೇಳಿದನು.

ಆದರೆ ಯಾಕೋಬನು, ''ಅದು ನಿನ್ನ ದಯೆ. ಆದರೆ
ಅಂಥ ಅಗತ್ಯವೇನೂ ಇಲ್ಲ'' ಎಂದು ಹೇಳಿದನು. 16ಆದ್ದ
ರಿಂದ ಆ ದಿನ ಏಸಾವನು ಸೇಯೀರಿಗೆ ಮರಳಿ ಪ್ರಯಾಣ
ಮಾಡಿದನು. 17ಆದರೆ ಯಾಕೋಬನು ಸುಕ್ಕೋತಿಗೆ*
ಹೋದನು. ಆ ಸ್ಥಳದಲ್ಲಿ ಅವನು ತನಗಾಗಿ ಒಂದು ಮನೆ
ಯನ್ನೂ ತನ್ನ ದನಕುರಿಗಳಿಗಾಗಿ ಚಿಕ್ಕ ಕೊಟ್ಟಿಗೆಗಳನ್ನೂ
ಕಟ್ಟಿಸಿದನು. ಆದ್ದರಿಂದ ಆ ಸ್ಥಳಕ್ಕೆ ''ಸುಕ್ಕೋತ್'' ಎಂದು
ಹೆಸರಾಯಿತು.

18ಆಮೇಲೆ ಯಾಕೋಬನು ಕಾನಾನ್ ದೇಶದ
ಶೆಕೆಮ್ ಪಟ್ಟಣಕ್ಕೆ ಬಂದು ತನ್ನ ಪಾಳೆಯವನ್ನು ಪಟ್ಟಣದ
ಸಮೀಪದಲ್ಲಿದ್ದ ಒಂದು ಹೊಲದಲ್ಲಿ ಹಾಕಿಸಿದನು.
19ಯಾಕೋಬನು ನೂರು ಬೆಳ್ಳಿನಾಣ್ಯಗಳನ್ನು ಕೊಟ್ಟು
ಶೆಕೆಮನ ತಂದೆಯಾದ ಹಮೋರನ ಕುಟುಂಬದಿಂದ ಆ
ಹೊಲವನ್ನು ಕೊಂಡುಕೊಂಡನು. 20ದೇವರನ್ನು ಆರಾಧಿ
ಸುವುದಕ್ಕಾಗಿ ಒಂದು ಯಜ್ಞವೇದಿಕೆಯನ್ನು ಕಟ್ಟಿಸಿ ಆ
ಸ್ಥಳಕ್ಕೆ ''ಇಸ್ರೇಲರ ದೇವರಾದ ಏಲೆಲೋಹೇ'' ಎಂದು
ಹೆಸರಿಟ್ಟನು.

## ದೀನಳ ಮಾನಭಂಗ

34 ದೀನಳು ಲೇಯಾ ಮತ್ತು ಯಾಕೋಬನ
ಮಗಳು. ದೀನಳು ಒಂದು ದಿನ ಆ ದೇಶದ
ಸ್ತ್ರೀಯರನ್ನು ನೋಡಲು ಹೊರಗೆ ಹೋದಳು. 2ಆ
ದೇಶದ ರಾಜನಾಗಿದ್ದ ಹಮೋರನ ಮಗನಾದ ಶೆಕೆಮನು
ದೀನಳನ್ನು ಕಂಡು ಎಳೆದುಕೊಂಡು ಹೋಗಿ ಬಲಾತ್ಕಾರ
ಮಾಡಿದನು. 3ಶೆಕೆಮನಿಗೆ ದೀನಳ ಮೇಲೆ

**ಸುಕ್ಕೋತ್** ಯೋರ್ದನ್ ನದಿಗೆ ಪೂರ್ವದಲ್ಲಿರುವ ಒಂದು ಊರು. ಈ ಪದದ ಅರ್ಥ: ''ತಾತ್ಕಾಲಿಕ ಆಶ್ರಯಗಳು.''

ಪ್ರೀತಿಯುಂಟಾಗಿ ಆಕೆಯನ್ನು ಮದುವೆ ಮಾಡಿಕೊಳ್ಳಲು
ಇಷ್ಟಪಟ್ಟನು. 4ಶೆಕೆಮನು ತನ್ನ ತಂದೆಗೆ, ‘‘ದಯವಿಟ್ಟು
ಈ ಹುಡುಗಿಯನ್ನು ನನಗೆ ಮದುವೆ ಮಾಡಿಸು’’ ಎಂದು
ಕೇಳಿಕೊಂಡನು.

5ಯಾಕೋಬನು ತನ್ನ ಮಗಳಿಗೆ ಶೆಕೆಮನಿಂದ ಮಾನ
ಭಂಗವಾದ ಸುದ್ದಿಯನ್ನು ಕೇಳಿದನು. ಆದರೆ ಅವನ
ಗಂಡುಮಕ್ಕಳೆಲ್ಲ ಕುರಿಗಳೊಂದಿಗೆ ಹೊಲದಲ್ಲಿದ್ದುದ
ರಿಂದ ಅವರು ಮನೆಗೆ ಬರುವತನಕ ಏನೂ ಮಾಡಲಿಲ್ಲ.
6ಆ ಸಮಯದಲ್ಲಿ ಶೆಕೆಮನ ತಂದೆಯಾದ ಹಮೋರನು
ಯಾಕೋಬನೊಂದಿಗೆ ಮಾತಾಡಲು ಬಂದನು.

7ಯಾಕೋಬನ ಗಂಡು ಮಕ್ಕಳು ಹೊಲದಲ್ಲಿದ್ದರು;
ನಡೆದ ಸಂಗತಿಯನ್ನು ಕೇಳಿ ಅವರಿಗೆ ತುಂಬ ಕೋಪ
ವಾಯಿತು. ಶೆಕೆಮನು ಯಾಕೋಬನ ಮಗಳನ್ನು ಮಾನ
ಭಂಗ ಮಾಡಿ ಇಸ್ರೇಲರಿಗೆ ಅವಮಾನ ಮಾಡಿದ್ದರಿಂದ
ಅವರು ಆವೇಶಗೊಂಡರು. ಶೆಕೆಮನು ತುಂಬ ಕೆಟ್ಟದ್ದನ್ನು
ಮಾಡಿದ್ದರಿಂದ ಅಣ್ಣಂದಿರು ಹೊಲದಿಂದ
ಹಿಂತಿರುಗಿದರು.

8ಆದರೆ ಹಮೋರನು ದೀನಳ ಅಣ್ಣಂದಿರೊಡನೆ
ಮಾತಾಡಿದನು. ಅವನು ಅವರಿಗೆ, ‘‘ನನ್ನ ಮಗನಾದ
ಶೆಕೆಮನು ದೀನಳನ್ನು ತುಂಬ ಇಷ್ಟಪಡುತ್ತಾನೆ. ಅವನು
ಆಕೆಯನ್ನು ಮದುವೆ ಮಾಡಿಕೊಳ್ಳಲು ದಯವಿಟ್ಟು ಅವ
ಕಾಶಕೊಡಿ. 9ಈ ಮದುವೆಯು ನಮಗಾಗಿರುವ ಒಂದು
ವಿಶೇಷ ಒಪ್ಪಂದವನ್ನು ತೋರಿಸುತ್ತದೆ. ಅದೇನಂದರೆ,
ನಮ್ಮ ಗಂಡಸರು ನಿಮ್ಮ ಸ್ತ್ರೀಯರನ್ನು ಮದುವೆಯಾಗ
ಬಹುದು ಮತ್ತು ನಿಮ್ಮ ಗಂಡಸರು ನಮ್ಮ ಸ್ತ್ರೀಯರನ್ನು
ಮದುವೆಯಾಗಬಹುದು. 10ನೀವು ನಮ್ಮೊಂದಿಗೆ ಒಂದೇ
ದೇಶದಲ್ಲಿ ವಾಸವಾಗಿರಬಹುದು. ನಿಮಗೆ ಇಲ್ಲಿ ಜಮೀನು
ಮಾಡಿಕೊಳ್ಳಲು ಮತ್ತು ವ್ಯಾಪಾರ ಮಾಡಲು ಸ್ವತಂತ್ರ
ವಿದೆ’’ ಎಂದು ಹೇಳಿದನು.

11ಶೆಕೆಮನು ಸಹ ಯಾಕೋಬನೊಡನೆ ಮತ್ತು ದೀನಳ
ಅಣ್ಣಂದಿರೊಡನೆ ಮಾತಾಡಿದನು. ಶೆಕೆಮನು ಅವರಿಗೆ,
‘‘ದಯವಿಟ್ಟು ನನ್ನನ್ನು ಸ್ವೀಕಾರ ಮಾಡಿ. ನೀವು ಏನೇ
ಹೇಳಿದರೂ ನಾನು ಮಾಡುತ್ತೇನೆ. 12ನಾನು ದೀನಳನ್ನು
ಮದುವೆಯಾಗಲು ನೀವು ನನಗೆ ಅವಕಾಶಕೊಟ್ಟರೆ
ಸಾಕು. ನಾನು ನಿಮಗೆ ಯಾವ ಉಡುಗೊರೆಯನ್ನು ಬೇಕಾ
ದರೂ ಕೊಡುವೆನು. ನೀವು ಏನು ಕೇಳಿದರೂ ಕೊಡು
ವೆನು. ಆದರೆ ನನಗೆ ದೀನಳನ್ನು ಮದುವೆ ಮಾಡಿಸಿಕೊಡಿ’’
ಎಂದು ಕೇಳಿಕೊಂಡನು.

13ಯಾಕೋಬನ ಗಂಡುಮಕ್ಕಳು ಶೆಕೆಮನಿಗೂ ಅವನ
ತಂದೆಗೂ ಸುಳ್ಳು ಹೇಳಲು ನಿರ್ಧರಿಸಿದರು. ತಮ್ಮ ತಂಗಿ
ಯಾದ ದೀನಳಿಗೆ ಶೆಕೆಮನು ಅಂಥ ಕೆಟ್ಟಕಾರ್ಯವನ್ನು
ಮಾಡಿದ್ದರಿಂದ ಅವರು ಇನ್ನೂ ಆವೇಶದಿಂದ ಇದ್ದರು.
14ಆದ್ದರಿಂದ ಆಕೆಯ ಅಣ್ಣಂದಿರು ಅವನಿಗೆ, ‘‘ನೀನು
ನಮ್ಮ ತಂಗಿಯನ್ನು ಮದುವೆಯಾಗಲು ನಾವು ಅವಕಾಶ
ಕೊಡುವಂತಿಲ್ಲ; ಯಾಕಂದರೆ ನಿನಗಿನ್ನೂ ಸುನ್ನತಿ
ಯಾಗಿಲ್ಲ. ನಮ್ಮ ತಂಗಿಯು ನಿನ್ನನ್ನು ಮದುವೆಯಾಗು
ವುದು ತಪ್ಪಾಗುತ್ತದೆ. 15ಆದರೆ ನೀನು ಮತ್ತು ನಿಮ್ಮ
ಪಟ್ಟಣದಲ್ಲಿರುವ ಪ್ರತಿಯೊಬ್ಬ ಗಂಡಸು ನಮ್ಮಂತೆ ಸುನ್ನತಿ
ಮಾಡಿಸಿಕೊಂಡರೆ ನೀನು ಆಕೆಯನ್ನು ಮದುವೆಯಾಗ
ಬಹುದು. 16ಆಮೇಲೆ ನಿಮ್ಮ ಗಂಡಸರು ನಮ್ಮ ಸ್ತ್ರೀಯ
ರನ್ನು ಮದುವೆಯಾಗಬಹುದು ಮತ್ತು ನಮ್ಮ ಗಂಡಸರು
ನಿಮ್ಮ ಸ್ತ್ರೀಯರನ್ನು ಮದುವೆಯಾಗಬಹುದು. ಆಗ ನಾವು
ಒಂದೇ ಜನಾಂಗವಾಗುವೆವು. 17ಆದರೆ ನೀವು ಸುನ್ನತಿ
ಮಾಡಿಸಿಕೊಳ್ಳದಿದ್ದರೆ ನಾವು ದೀನಳನ್ನು ಕರೆದುಕೊಂಡು
ಹೋಗುತ್ತೇವೆ’’ ಎಂದು ಹೇಳಿದರು.

18ಅವರು ಹೇಳಿದ್ದು ಹಮೋರನಿಗೂ ಶೆಕೆಮನಿಗೂ
ಒಳ್ಳೆಯದೆಂದು ತೋಚಿತು. 19ದೀನಳ ಅಣ್ಣಂದಿರು ಹೇಳಿ
ದ್ದನ್ನು ಮಾಡಲು ಶೆಕೆಮನು ಸಂತೋಷದಿಂದ ಒಪ್ಪಿ
ಕೊಂಡನು.

### ಸೇಡು

ಶೆಕೆಮನಿಗೆ ಅವರ ಕುಟುಂಬದಲ್ಲಿ ತುಂಬ ಗೌರವ
ವಿತ್ತು. 20ಹಮೋರನು ಮತ್ತು ಶೆಕೆಮನು ತಮ್ಮ ನಗರದ
ಸಭಾಸ್ಥಳಕ್ಕೆ ಹೋದರು. ಅವರು ಪಟ್ಟಣದ ಗಂಡಸ
ರೊಂದಿಗೆ ಮಾತಾಡಿ, 21‘‘ಈ ಇಸ್ರೇಲರಿಗೆ ನಮ್ಮ ಸ್ನೇಹಿತ
ರಾಗಿರಲು ಇಷ್ಟ. ಇವರು ನಮ್ಮ ದೇಶದಲ್ಲಿ ವಾಸವಾಗಿದ್ದು
ಕೊಂಡು ನಮ್ಮೊಂದಿಗೆ ಸಮಾಧಾನದಿಂದಿರುವುದು
ನಮಗೂ ಇಷ್ಟ. ನಮ್ಮೆಲ್ಲರಿಗೂ ಬೇಕಾಗುವಷ್ಟು ಭೂಮಿ
ನಮ್ಮಲ್ಲಿದೆ. ನಾವು ಅವರ ಸ್ತ್ರೀಯರನ್ನು ಮದುವೆಯಾಗು
ವುದಕ್ಕೂ ನಮ್ಮ ಸ್ತ್ರೀಯರನ್ನು ಅವರಿಗೆ ಮದುವೆ ಮಾಡಿ
ಕೊಡುವುದಕ್ಕೂ ಸಂತೋಷ ಪಡುತ್ತೇವೆ. 22ಆದರೆ ನಾವು
ಮಾಡಬೇಕಾದ ಒಂದೇ ಒಂದು ಕಾರ್ಯವೇನಂದರೆ,
ಇಸ್ರೇಲರಂತೆ ನಮ್ಮ ಎಲ್ಲಾ ಗಂಡಸರು ಸುನ್ನತಿ ಮಾಡಿಸಿ
ಕೊಳ್ಳಬೇಕು. 23ನಾವು ಹೀಗೆ ಮಾಡಿದರೆ, ಅವರ ಎಲ್ಲಾ
ದನಕುರಿಗಳಿಂದಲೂ ಪಶುಗಳಿಂದಲೂ ಐಶ್ವರ್ಯವಂತ
ರಾಗುತ್ತೇವೆ. ನಾವು ಈ ಒಪ್ಪಂದವನ್ನು ಅವರೊಂದಿಗೆ
ಮಾಡಿಕೊಂಡರೆ ಅವರು ನಮ್ಮೊಂದಿಗೆ ಇಲ್ಲಿ ವಾಸಿ
ಸುವರು’’ ಎಂದು ಹೇಳಿದರು. 24ಸಭಾಸ್ಥಳದಲ್ಲಿದ್ದ ಗಂಡ
ಸರೆಲ್ಲರೂ ಹಮೋರ ಮತ್ತು ಶೆಕೆಮರ ಮಾತಿಗೆ ಒಪ್ಪಿ
ಕೊಂಡರು. ಬಳಿಕ ಎಲ್ಲಾ ಗಂಡಸರು ಸುನ್ನತಿ ಮಾಡಿಸಿ
ಕೊಂಡರು.

25ಮೂರು ದಿನಗಳಾಯಿತು. ಸುನ್ನತಿ ಮಾಡಿಸಿ
ಕೊಂಡಿದ್ದ ಗಂಡಸರು ಇನ್ನೂ ಗಾಯದ ನೋವಿ
ನಲ್ಲಿದ್ದರು. ಈ ಸಮಯದಲ್ಲಿ ಗಂಡಸರು ಬಲಹೀನ

ರಾಗಿರುತ್ತಾರೆ ಎಂಬುದು ಯಾಕೋಬನ ಇಬ್ಬರು ಗಂಡು
ಮಕ್ಕಳಾದ ಸಿಮೆಯೋನ್ ಮತ್ತು ಲೇವಿಗೆ ತಿಳಿದಿತ್ತು. ಆದ್ದ
ರಿಂದ ಅವರು ಪಟ್ಟಣಕ್ಕೆ ಹೋಗಿ ಅಲ್ಲಿದ್ದ ಎಲ್ಲಾ ಗಂಡ
ಸರನ್ನು ಕೊಂದುಹಾಕಿದರು. [26]ದೀನಳ ಅಣ್ಣಂದಿರಾದ
ಸಿಮೆಯೋನನು ಮತ್ತು ಲೇವಿಯು ಹಮೋರನನ್ನೂ
ಅವನ ಮಗನಾದ ಶೆಕೆಮನನ್ನೂ ಕೊಂದುಹಾಕಿ ದೀನ
ಳನ್ನು ಶೆಕೆಮನ ಮನೆಯಿಂದ ಕರೆದುಕೊಂಡು ಬಂದರು.
[27]ಯಾಕೋಬನ ಗಂಡುಮಕ್ಕಳು ಪಟ್ಟಣದೊಳಗೆ
ಹೋಗಿ ಅಲ್ಲಿದ್ದ ಪ್ರತಿಯೊಂದನ್ನು ತೆಗೆದುಕೊಂಡರು.
ತಮ್ಮ ತಂಗಿಗೆ ಶೆಕೆಮನು ಮಾಡಿದ ಮಾನಭಂಗದಿಂದ
ಅವರು ಇನ್ನೂ ಕೋಪದಲ್ಲಿದ್ದರು. [28]ಹೀಗೆ ದೀನಳ
ಅಣ್ಣಂದಿರು ಅವರ ದನ ಕುರಿಕತ್ತೆಗಳನ್ನೂ ಪಟ್ಟಣದ
ಲ್ಲಿಯೂ ಹೊಲದಲ್ಲಿಯೂ ಇದ್ದ ಆಸ್ತಿಯೆಲ್ಲವನ್ನೂ
ತೆಗೆದುಕೊಂಡರು. [29]ಅವರ ಹೆಂಡತಿಯರನ್ನೂ
ಮಕ್ಕಳನ್ನೂ ಸೆರೆಹಿಡಿದು ಮನೆಯಲ್ಲಿದ್ದದ್ದನ್ನೆಲ್ಲಾ
ದೋಚಿಕೊಂಡರು.

[30]ಆದರೆ ಯಾಕೋಬನು ಸಿಮೆಯೋನನಿಗೆ ಮತ್ತು
ಲೇವಿಗೆ, ‘‘ನೀವು ನನ್ನನ್ನು ಅಪಾಯಕ್ಕೆ ಗುರಿಮಾಡಿದಿರಿ.
ಈ ದೇಶದಲ್ಲಿರುವ ಎಲ್ಲಾ ಕಾನಾನ್ಯರು ಮತ್ತು ಪೆರಿ
ಜೀಯರು ನನ್ನನ್ನು ದ್ವೇಷಿಸಿ ನನಗೆ ವಿರೋಧವಾಗುವರು.
ನಮ್ಮಲ್ಲಿರುವ ಜನರು ಕೆಲವರೇ. ಈ ದೇಶದಲ್ಲಿರುವ
ಜನರು ಒಟ್ಟಾಗಿ ಸೇರಿಕೊಂಡು ನಮಗೆ ವಿರೋಧವಾಗಿ
ಹೋರಾಡಿದರೆ ನಾನೂ ನಮ್ಮ ಜನರೆಲ್ಲರೂ ನಾಶವಾಗು
ವೆವು’’ ಎಂದು ಹೇಳಿದನು. [31]ಆದರೆ ದೀನಳ ಅಣ್ಣಂದಿರು,
‘‘ನಮ್ಮ ತಂಗಿಯನ್ನು ಆ ಜನರು ಸೂಳೆಯಂತೆ ಉಪ
ಯೋಗಿಸಿಕೊಳ್ಳಲು ನಾವು ಬಿಡಬೇಕೆ? ಇಲ್ಲ, ನಮ್ಮ
ತಂಗಿಗೆ ಆ ಜನರು ಮಾಡಿದ್ದು ತಪ್ಪು’’ ಎಂದು ಹೇಳಿದರು.

## ಬೇತೇಲಿನಲ್ಲಿ ಯಾಕೋಬನು

35 ದೇವರು ಯಾಕೋಬನಿಗೆ, ‘‘ನೀನು ಬೇತೇಲ್
ಪಟ್ಟಣಕ್ಕೆ ಹೋಗಿ ಅಲ್ಲೇ ವಾಸಿಸು ಮತ್ತು
ಆರಾಧನೆಗಾಗಿ ಒಂದು ಯಜ್ಞವೇದಿಕೆಯನ್ನು ಕಟ್ಟಿಸು.
ನೀನು ನಿನ್ನ ಅಣ್ಣನಾದ ಏಸಾವನ ಬಳಿಯಿಂದ ಓಡಿ
ಹೋಗುತ್ತಿದ್ದಾಗ ದೇವರಾದ ‘ಏಲ್’* ನಿನಗೆ ಅಲ್ಲಿ
ಕಾಣಿಸಿಕೊಳ್ಳಲಿಲ್ಲವೇ! ಆತನ ಆರಾಧನೆಗಾಗಿ ಅಲ್ಲಿ ಯಜ್ಞ
ವೇದಿಕೆಯನ್ನು ಕಟ್ಟಿಸು’’ ಎಂದು ಹೇಳಿದನು.

[2]ಆದ್ದರಿಂದ ಯಾಕೋಬನು ತನ್ನ ಕುಟುಂಬದವರಿಗೂ
ತನ್ನ ಎಲ್ಲಾ ಸೇವಕರಿಗೂ, ‘‘ನಿಮ್ಮಲ್ಲಿರುವ ಮರದ ಮತ್ತು
ಲೋಹದ ಎಲ್ಲಾ ಅನ್ಯದೇವರುಗಳನ್ನು ನಾಶಮಾಡಿರಿ.
ನಿಮ್ಮನ್ನು ಶುದ್ಧಿಮಾಡಿಕೊಂಡು ಶುದ್ಧವಾದ ಬಟ್ಟೆಗಳನ್ನು
ಧರಿಸಿಕೊಳ್ಳಿರಿ. [3]ನಾವು ಇಲ್ಲಿಂದ ಹೊರಟು ಬೇತೇಲಿಗೆ
ಹೋಗೋಣ; ನಾನು ಕಷ್ಟದಲ್ಲಿದ್ದಾಗ ಸಹಾಯ ಮಾಡಿದ
ದೇವರಿಗಾಗಿ ಒಂದು ಯಜ್ಞವೇದಿಕೆಯನ್ನು ಅಲ್ಲಿ ಕಟ್ಟಿಸು
ತ್ತೇನೆ. ನಾನು ಹೋದಕಡೆಗಳಲ್ಲೆಲ್ಲಾ ಆ ದೇವರು
ನನ್ನೊಂದಿಗೆ ಇದ್ದನು’’ ಎಂದು ಹೇಳಿದನು.

[4]ಆದ್ದರಿಂದ ಅವರು ತಮ್ಮಲ್ಲಿದ್ದ ಎಲ್ಲಾ ಅನ್ಯ ದೇವರು
ಗಳನ್ನು ತಮ್ಮ ಕಿವಿಗಳಲ್ಲಿದ್ದ ವಾಲೆಗಳನ್ನು ಯಾಕೋಬನಿಗೆ
ಕೊಟ್ಟರು. ಯಾಕೋಬನು ಅವುಗಳನ್ನೆಲ್ಲಾ ಶೆಕೆಮ್
ಪಟ್ಟಣದ ಸಮೀಪದಲ್ಲಿರುವ ಏಲಾ ವೃಕ್ಷದ ಬುಡದಲ್ಲಿ
ಹೂಳಿಟ್ಟನು.

[5]ಯಾಕೋಬನು ಮತ್ತು ಅವನ ಗಂಡು ಮಕ್ಕಳು ಆ
ಸ್ಥಳದಿಂದ ಹೊರಟರು. ಆ ಪ್ರದೇಶದಲ್ಲಿದ್ದ ಜನರು ಅವ
ರನ್ನು ಹಿಂಬಾಲಿಸಿ ಕೊಲ್ಲಬೇಕೆಂದಿದ್ದರು. ಆದರೆ ಅವರು
ಭಯಪಟ್ಟು ಯಾಕೋಬನನ್ನು ಹಿಂಬಾಲಿಸಲಿಲ್ಲ.
[6]ಯಾಕೋಬನು ಮತ್ತು ಅವರ ಜನರು ಲೂಜಿಗೆ
ಹೋದರು. ಈಗ ಲೂಜನ್ನು ‘ಬೇತೇಲ್’ ಎಂದು ಕರೆ
ಯುತ್ತಾರೆ. ಅದು ಕಾನಾನ್ ದೇಶದಲ್ಲಿದೆ. [7]ಯಾಕೋ
ಬನು ಅಲ್ಲಿ ಒಂದು ಯಜ್ಞವೇದಿಕೆಯನ್ನು ಕಟ್ಟಿಸಿದನು.
ಯಾಕೋಬನು ತನ್ನ ಅಣ್ಣನ ಬಳಿಯಿಂದ ಓಡಿ
ಹೋಗುತ್ತಿದ್ದಾಗ ದೇವರು ಅವನಿಗೆ ಮೊದಲು ಕಾಣಿಸಿ
ಕೊಂಡದ್ದು ಆ ಸ್ಥಳದಲ್ಲೇ. ಆದ್ದರಿಂದ ಯಾಕೋಬನು
ಆ ಸ್ಥಳಕ್ಕೆ ‘‘ಏಲ್ ಬೇತೇಲ್’’ ಎಂದು ಹೆಸರಿಟ್ಟನು.

[8]ರೆಬೆಕ್ಕಳ ದಾಸಿಯಾದ ದೆಬೋರಳು ಅಲ್ಲಿ ಸತ್ತು
ಹೋದಳು. ಆದ್ದರಿಂದ ಅವರು ಆಕೆಯನ್ನು ಬೇತೇಲಿನ
ಬಳಿಯಲ್ಲಿರುವ ಏಲಾ ವೃಕ್ಷದ ಬುಡದಲ್ಲಿ ಸಮಾಧಿ
ಮಾಡಿದರು. ಆ ಸ್ಥಳಕ್ಕೆ ‘‘ಅಲ್ಲೋನ್ ಬಾಕೂತ್’’*
ಎಂದು ಹೆಸರಿಟ್ಟರು.

## ಯಾಕೋಬನ ಹೊಸ ಹೆಸರು

[9]ಯಾಕೋಬನು ಪದ್ದನ್‌ಅರಾಮಿನಿಂದ ಹಿಂತಿರುಗಿ
ಬಂದಾಗ, ದೇವರು ಅವನಿಗೆ ಮತ್ತೆ ಕಾಣಿಸಿಕೊಂಡು
ಅವನನ್ನು ಆಶೀರ್ವದಿಸಿದನು. [10]ದೇವರು ಯಾಕೋಬ
ನಿಗೆ, ‘‘ನಿನ್ನ ಹೆಸರು ಯಾಕೋಬ. ಆದರೆ ನಾನು ಆ
ಹೆಸರನ್ನು ಬದಲಾಯಿಸುವೆನು. ಇನ್ನು ಮುಂದೆ ನೀನು
ಯಾಕೋಬನೆಂದು ಕರೆಸಿಕೊಳ್ಳುವುದಿಲ್ಲ. ನಿನ್ನ ಹೊಸ
ಹೆಸರು ‘ಇಸ್ರೇಲ್’ ಎಂದು ಹೇಳಿ ಅವನಿಗೆ ‘ಇಸ್ರೇಲ್’
ಎಂದು ಹೆಸರಿಟ್ಟನು.

[11]ದೇವರು ಅವನಿಗೆ,‘‘ನಾನೇ ಸರ್ವಶಕ್ತನಾದ
ದೇವರು. ನೀನು ಅನೇಕ ಮಕ್ಕಳನ್ನು ಪಡೆದು ಮಹಾ
ಜನಾಂಗವಾಗಿ ಬೆಳೆಯುವೆ. ಅನೇಕ ಜನಾಂಗಗಳೂ
ರಾಜರುಗಳೂ ನಿನ್ನೊಳಗಿಂದ ಬರುವರು. [12]ನಾನು ಅಬ್ರ
ಹಾಮನಿಗೂ ಇಸಾಕನಿಗೂ ವಿಶೇಷವಾದ ದೇಶವನ್ನು

**ಏಲ್** ಹೀಬ್ರೂ ಭಾಷೆಯಲ್ಲಿ ದೇವರ ಹೆಸರು.

**ಅಲ್ಲೋನ್ ಬಾಕೂತ್** ಇದರರ್ಥ ‘‘ದುಃಖದ ಓಕ್‌ಮರ.’’

ಕೊಟ್ಟೆನು. ಈಗ ನಾನು ಆ ದೇಶವನ್ನು ನಿನಗೆ
ಕೊಡುವೆನು. ನಾನು ಆ ದೇಶವನ್ನು ನಿನ್ನ ಮುಂದಿನ
ಸಂತತಿಗಳವರಿಗೆ ಕೊಡುವೆನು'' ಎಂದು ಹೇಳಿದನು.
13ಆಮೇಲೆ ದೇವರು ಆ ಸ್ಥಳದಿಂದ ಹೊರಟುಹೋದನು.
14-15ಯಾಕೋಬನು ಈ ಸ್ಥಳದಲ್ಲಿ ಜ್ಞಾಪಕಾರ್ಥವಾಗಿ
ಒಂದು ಸ್ಮಾರಕಕಲ್ಲನ್ನು ನಿಲ್ಲಿಸಿ ಅದರ ಮೇಲೆ ದ್ರಾಕ್ಷಾರಸ
ವನ್ನೂ ಎಣ್ಣೆಯನ್ನೂ ಸುರಿದನು. ಇದು ಒಂದು ವಿಶೇಷ
ವಾದ ಸ್ಥಳ. ಯಾಕಂದರೆ ಅಲ್ಲಿ ದೇವರು ಯಾಕೋಬ
ನೊಂದಿಗೆ ಮಾತಾಡಿದನು. ಯಾಕೋಬನು ಆ ಸ್ಥಳಕ್ಕೆ
'ಬೇತೇಲ್' ಎಂದು ಹೆಸರಿಟ್ಟನು.

### ಹೆರಿಗೆ ಬೇನೆಯಿಂದ ರಾಹೇಲಳ ಮರಣ

16ಯಾಕೋಬನು ಮತ್ತು ಅವನ ಜನರು ಬೇತೇಲಿ
ನಿಂದ ಹೊರಟು ಎಫ್ರಾತೂರಿಗೆ (ಬೇತ್ಲೆಹೇಮಿಗೆ) ಬರು
ವುದಕ್ಕಿಂತ ಸ್ವಲ್ಪ ಮುಂಚೆ ರಾಹೇಲಳಿಗೆ ಹೆರಿಗೆಕಾಲ
ಬಂದಿತು. 17ಆದರೆ ರಾಹೇಲಳು ಈ ಹೆರಿಗೆಯಲ್ಲಿ ತುಂಬ
ಕಷ್ಟಪಡಬೇಕಾಯಿತು. ಆಕೆಗೆ ಬಹಳ ನೋವಿತ್ತು,
ರಾಹೇಲಳ ದಾದಿಯು ಇದನ್ನು ಕಂಡು, ಆಕೆಗೆ,
''ರಾಹೇಲಳೇ, ಭಯಪಡಬೇಡ. ನೀನು ಮತ್ತೊಬ್ಬ
ಮಗನಿಗೆ ಜನನ ಕೊಡುತ್ತಿರುವೆ'' ಎಂದು ಹೇಳಿದಳು.

18ರಾಹೇಲಳು ಮಗನನ್ನು ಹೆರುವಾಗ ಸತ್ತುಹೋದಳು.
ಸಾಯುವುದಕ್ಕೆ ಮೊದಲು, ರಾಹೇಲಳು ಆ ಮಗುವಿಗೆ
ಬೆನೋನಿ* ಎಂದು ಹೆಸರಿಟ್ಟಳು. ಆದರೆ ಯಾಕೋಬನು
ಅವನಿಗೆ ಬೆನ್ಯಾಮೀನ್* ಎಂದು ಹೆಸರಿಟ್ಟನು.
19ರಾಹೇಲಳನ್ನು ಎಫ್ರಾತಿಗೆ ಹೋಗುವ ದಾರಿಯಲ್ಲಿ
ಸಮಾಧಿ ಮಾಡಲಾಯಿತು. (ಎಫ್ರಾತ ಅಂದರೆ
ಬೇತ್ಲೆಹೇಮ್.) 20ಯಾಕೋಬನು ರಾಹೇಲಳ ಗೌರವಾ
ರ್ಥವಾಗಿ ಆಕೆಯ ಸಮಾಧಿಯ ಮೇಲೆ ವಿಶೇಷವಾದ
ಒಂದು ಕಲ್ಲನ್ನು ಇಟ್ಟನು. ಇಂದಿಗೂ ಆ ವಿಶೇಷವಾದ
ಕಲ್ಲು ಅಲ್ಲಿದೆ. 21ಆಮೇಲೆ ಇಸ್ರೇಲನು (ಯಾಕೋಬನು)
ತನ್ನ ಪ್ರಯಾಣವನ್ನು ಮುಂದುವರೆಸಿ 'ಮಿಗ್ದಲ್
ಏದರ್' ಗೋಪುರದ ದಕ್ಷಿಣದಲ್ಲಿ ಗುಡಾರವನ್ನು
ಹಾಕಿಸಿದನು.

22ಇಸ್ರೇಲನು ಸ್ವಲ್ಪಕಾಲದವರೆಗೆ ಅಲ್ಲಿ ಇಳಿದು
ಕೊಂಡನು. ಅವನು ಅಲ್ಲಿದ್ದಾಗ ರೂಬೇನನು ಇಸ್ರೇಲನ
ದಾಸಿಯಾದ* ಬಿಲ್ಹಳೊಡನೆ ಮಲಗಿಕೊಂಡನು.
ಇಸ್ರೇಲನು ಇದರ ಬಗ್ಗೆ ಕೇಳಿದಾಗ ತುಂಬ ಕೋಪ
ಗೊಂಡನು.

### ಇಸ್ರಾಯೇಲನ ಕುಟುಂಬ

ಯಾಕೋಬನಿಗೆ (ಇಸ್ರೇಲ) ಹನ್ನೆರಡು ಗಂಡು
ಮಕ್ಕಳಿದ್ದರು.
23ಲೇಯಾಳ ಗಂಡು ಮಕ್ಕಳು: ಯಾಕೋಬನ
ಚೊಚ್ಚಲ ಮಗನಾದ ರೂಬೇನ್, ಸಿಮೆಯೋನ್, ಲೇವಿ,
ಯೆಹೂದ, ಇಸ್ಸಾಕಾರ್, ಮತ್ತು ಜೆಬುಲೊನ್.
24ರಾಹೇಲಳ ಗಂಡು ಮಕ್ಕಳು: ಯೋಸೇಫ ಮತ್ತು
ಬೆನ್ಯಾಮೀನ್
25ಬಿಲ್ಹಳು ರಾಹೇಲಳ ದಾಸಿ. ಬಿಲ್ಹಳ ಗಂಡು ಮಕ್ಕಳು:
ದಾನ್ ಮತ್ತು ನಫ್ತಾಲಿ.
26ಜಿಲ್ಪಳು ಲೇಯಳ ದಾಸಿ. ಜಿಲ್ಪಳ ಗಂಡು ಮಕ್ಕಳು:
ಗಾದ್ ಮತ್ತು ಅಶೇರ್.
ಇವರೆಲ್ಲರು ಯಾಕೋಬನಿಗೆ ಪದ್ದನ್ಅರಾಮಿನಲ್ಲಿ
ಹುಟ್ಟಿದ ಗಂಡು ಮಕ್ಕಳು.
27ಯಾಕೋಬನು ತನ್ನ ತಂದೆಯಾದ ಇಸಾಕನ ಬಳಿಗೆ
ಕಿರ್ಯತರ್ಬದಲ್ಲಿದ್ದ (ಹೆಬ್ರೋನ್) ಮವ್ರೆಗೆ
ಬಂದನು. ಅಬ್ರಹಾಮನು ಮತ್ತು ಇಸಾಕನು ವಾಸವಾಗಿ
ದ್ದದ್ದು ಇಲ್ಲೇ. 28ಇಸಾಕನು ನೂರೆಂಭತ್ತು ವರ್ಷಗಳವರೆಗೆ
ಜೀವಿಸಿದನು. 29ಆಮೇಲೆ ಇಸಾಕನು ದಿನ ತುಂಬಿದ
ಮುದುಕನಾಗುವವರೆಗೆ ಜೀವಿಸಿ ತೀರಿಕೊಂಡನು. ಅವನ
ಮಕ್ಕಳಾದ ಏಸಾವನು ಮತ್ತು ಯಾಕೋಬನು ತಮ್ಮ
ಅಜ್ಜನಿಗೆ ಸಮಾಧಿಯಾಗಿದ್ದ ಸ್ಥಳದಲ್ಲೇ ತಮ್ಮ ತಂದೆಗೆ
ಸಮಾಧಿ ಮಾಡಿದರು.

### ಏಸಾವನ ಕುಟುಂಬ

36 ಏಸಾವನ (ಎದೋಮ್) ಕುಟುಂಬ ಚರಿತ್ರೆ:
2ಏಸಾವನು ಕಾನಾನ್ ದೇಶದ ಸ್ತ್ರೀಯರನ್ನು
ಮದುವೆಯಾದನು. ಏಸಾವನ ಹೆಂಡತಿಯರು: ಹಿತ್ತಿಯ
ನಾದ ಏಲೋನನ ಮಗಳಾದ ಆದಾ; ಹಿವ್ವಿಯನಾದ
ಸಿಬೆಯೋನಿಗೆ ಹುಟ್ಟಿದ ಅನಾಹ ಎಂಬಾಕೆಯ ಮಗಳಾ
ಗಿದ್ದ ಒಹೊಲೀಬಾಮ; 3ಇಷ್ಮಾಯೇಲನ ಮಗಳೂ
ನೆಬಾಯೋತನ ತಂಗಿಯೂ ಆಗಿದ್ದ ಬಾಸೆಮತ್. 4ಏಸಾವ
ನಿಗೆ ಮತ್ತು ಆದಾಳಿಗೆ ಎಲೀಫಜನೆಂಬ ಮಗನಿದ್ದನು.
ಬಾಸೆಮತಳಿಗೆ ರೆಗೂವೇಲನೆಂಬ ಮಗನಿದ್ದನು.
5ಒಹೊಲೀಬಾಮಳಿಗೆ ಮೂವರು ಗಂಡುಮಕ್ಕಳಿದ್ದರು:
ಯೆಗೂಷ, ಯಳಾಮ ಮತ್ತು ಕೋರಹ, ಇವರೆಲ್ಲರೂ
ಏಸಾವನ ಗಂಡುಮಕ್ಕಳು ಮತ್ತು ಕಾನಾನ್ ದೇಶದಲ್ಲಿ
ಹುಟ್ಟಿದವರು.
6-8ಯಾಕೋಬ ಮತ್ತು ಏಸಾವರ ಕುಟುಂಬಗಳು
ಬಹಳ ವೃದ್ಧಿಯಾದ ಕಾರಣ ಕಾನಾನ್ ದೇಶವು ಅವರಿಗೆ
ಸಾಕಾಗಲಿಲ್ಲ. ಆದ್ದರಿಂದ ಏಸಾವನು ತನ್ನ ತಮ್ಮನಾದ
ಯಾಕೋಬನಿಂದ ದೂರ ಹೋದನು. ಏಸಾವನು ತನ್ನ

---

**ಬೆನೋನಿ** ಈ ಹೆಸರಿನ ಅರ್ಥ: ''ನನ್ನ ಸಂಕಟದ ಮಗನು.''

**ಬೆನ್ಯಾಮೀನ್** ಈ ಹೆಸರಿನ ಅರ್ಥ: ''ನನ್ನ ಪ್ರಿಯ ಮಗ.''

**ದಾಸಿ** ಅಥವಾ, ''ಉಪಪತ್ನಿ'' ದಾಸಿಯಾಗಿದ್ದರೂ ಹೆಂಡತಿಯಂತಿದ್ದಳು.

ಹೆಂಡತಿಯರನ್ನೂ ಗಂಡು ಹೆಣ್ಣು ಮಕ್ಕಳನ್ನೂ ಎಲ್ಲಾ ಸೇವಕರನ್ನೂ ದನಗಳನ್ನೂ ಮತ್ತು ಇತರ ಪಶುಗಳನ್ನೂ ತನಗೆ ಕಾನಾನಿನಲ್ಲಿದ್ದ ಪ್ರತಿಯೊಂದು ಆಸ್ತಿಯನ್ನೂ ತೆಗೆದುಕೊಂಡು ಸೇಯೀರ್ ಬೆಟ್ಟದ ಸೀಮೆಗೆ ಹೋದನು. (ಏಸಾವನಿಗೆ ಎದೋಮ್ ಎಂಬ ಹೆಸರೂ ಇದೆ. ಎದೋಮ್ ಎಂಬುದು ಸೇಯೀರ್ ದೇಶದ ಮತ್ತೊಂದು ಹೆಸರು.)
[9]ಏಸಾವನು ಎದೋಮ್ ಜನರ ತಂದೆ. ಸೇಯೀರ್ ದೇಶದಲ್ಲಿ (ಎದೋಮ್) ವಾಸ ವಾಗಿದ್ದ ಏಸಾವನ ಕುಟುಂಬದವರ ಹೆಸರುಗಳು:

[10]ಏಸಾವನ ಗಂಡು ಮಕ್ಕಳು ಎಲೀಫಜ, ಇವನು ಏಸಾವನಿಗೆ ಆದಾ ಎಂಬಾಕೆಯಲ್ಲಿ ಹುಟ್ಟಿದ ಮಗನು.

ರೆಗೂವೇಲ, ಇವನು ಏಸಾವನಿಗೆ ಬಾಸೆಮತಳಲ್ಲಿ ಹುಟ್ಟಿದ ಮಗನು.

[11]ಎಲೀಫಜನಿಗೆ ಐದು ಮಂದಿ ಗಂಡುಮಕ್ಕಳಿದ್ದರು. ತೇಮಾನ್, ಓಮಾರ್ ಚೆಫೋ, ಗತಾಮ್ ಮತ್ತು ಕೆನಜ್.
[12]ಎಲೀಫಜನಿಗೆ ತಿಮ್ನ ಎಂಬ ಒಬ್ಬ ದಾಸಿಯೂ ಇದ್ದಳು. ತಿಮ್ನಳಿಗೆ ಮತ್ತು ಎಲೀಫಜನಿಗೆ ಅಮಾಲೇಕ ಎಂಬ ಒಬ್ಬ ಗಂಡು ಮಗನಿದ್ದನು.

[13]ರೆಗೂವೇಲನಿಗೆ ನಾಲ್ಕು ಮಂದಿ ಗಂಡು ಮಕ್ಕಳಿದ್ದರು: ನಹತ್, ಜೆರಹ, ಶಮ್ಮಾ ಮತ್ತು ಮಿಜ್ಜಾ. ಇವರು ಏಸಾವನ ಮೊಮ್ಮಕ್ಕಳು. ಇವರು ಏಸಾವನ ಹೆಂಡತಿಯಾದ ಬಾಸೆಮತಳ ಸಂತತಿಯವರು.
[14]ಏಸಾವನ ಮೂರನೆ ಹೆಂಡತಿಯು ಅನಾಹನ ಮಗಳಾದ ಒಹೊಲೀಬಾಮ; (ಅನಾಹನು ಸಿಬೆಯೋನನ ಮಗನು.) ಏಸಾವನ ಮತ್ತು ಒಹೊಲೀಬಾಮಳ ಮಕ್ಕಳು: ಯೆಗೂಷ್, ಯಳಾಮ್ ಮತ್ತು ಕೋರಹ.

[15]ಏಸಾವನ ವಂಶಸ್ಥರ ಕುಲಪತಿಗಳು:

ಏಸಾವನ ಮೊದಲನೆ ಮಗನಾದ ಎಲೀಫಜ. ಎಲೀಫಜ ನಿಂದ ಬಂದವರು: ತೇಮಾನ್, ಓಮಾರ್, ಚೆಫೋ, ಕೆನೆಜ್,
[16]ಕೋರಹ, ಗತಾಮ ಮತ್ತು ಅಮಾಲೇಕ.

ಈ ಕುಲಪತಿಗಳು ಏಸಾವನ ಹೆಂಡತಿಯಾದ ಆದಾಳ ಸಂತತಿಯವರು.

[17]ಏಸಾವನ ಮಗನಾದ ರೆಗೂವೇಲನು ಈ ಕುಟುಂಬಗಳ ತಂದೆಯಾಗಿದ್ದನು: ನಹತ, ಜೆರಹ, ಶಮ್ಮಾ ಮತ್ತು ಮಿಜ್ಜಾ.

ಈ ಕುಟುಂಬಗಳೆಲ್ಲವು ಏಸಾವನ ಹೆಂಡತಿಯಾದ ಬಾಸೆಮತಳ ಸಂತತಿಯವರು.

[18]ಅನಾಹನ ಮಗಳೂ ಏಸಾವನ ಹೆಂಡತಿಯೂ ಆಗಿದ್ದ ಒಹೊಲೀಬಾಮಳಲ್ಲಿ ಹುಟ್ಟಿದವರು: ಯಗೂಷ್, ಯೆಳಾಮ ಮತ್ತು ಕೋರಹ. ಈ ಮೂವರು ತಮ್ಮ ಕುಟುಂಬಗಳ ತಂದೆಯಾಗಿದ್ದರು.
[19]ಈ ಕುಟುಂಬಗಳಿಗೆಲ್ಲಾ ಏಸಾವನೇ ಮೂಲ ಪುರುಷ.

[20]ಏಸಾವನಿಗಿಂತ ಮೊದಲು ಹೋರಿಯ ಜನಾಂಗದ ಸೇಯೀರ್ ಎಂಬವನು ಎದೋಮಿನಲ್ಲಿ ವಾಸವಾಗಿದ್ದನು. ಸೇಯೀರನ ಗಂಡು ಮಕ್ಕಳು: ಲೋಟಾನ್, ಶೋಬಾಲ್, ಸಿಬೆಯೋನ್, ಅನಾಹ,
[21]ದೀಶೋನ್, ಏಚೆರ್ ಮತ್ತು ದೀಶಾನ್. ಆ ಗಂಡು ಮಕ್ಕಳು ಕುಲ ಪತಿಗಳಾಗಿದ್ದರು.

[22]ಲೋಟಾನನು ಹೋರಿ, ಹೇಮಾಮ್ ಎಂಬುವರ ತಂದೆ. (ತಿಮ್ನಾಳು ಲೋಟಾನನ ತಂಗಿ.)

[23]ಶೋಬಾಲನು ಅಲ್ವಾನ್ ಮಾನಹತ್, ಗೇಬಾಲ್, ಶೆಫೋ ಮತ್ತು ಓನಾಮ್ ಎಂಬುವರ ತಂದೆ.

[24]ಸಿಬೆಯೋನನಿಗೆ ಅಯ್ಯಾ ಮತ್ತು ಅನಾಹ ಎಂಬ ಇಬ್ಬರು ಗಂಡುಮಕ್ಕಳಿದ್ದರು. (ತನ್ನ ತಂದೆಯ ಕತ್ತೆಗಳನ್ನು ಮೇಯಿಸುತ್ತಿದ್ದಾಗ ಬಿಸಿನೀರಿನ ಒರತೆಗಳನ್ನು ಕಂಡುಕೊಂಡವನೇ ಅನಾಹ.)

[25]ಅನಾಹನು ದೀಶೋನ್ ಮತ್ತು ಒಹೊಲೀಬಾಮಳ ತಂದೆ.

[26]ದಿಶೋನನಿಗೆ ಹೆಮ್ದಾನ್, ಎಷ್ಬಾನ್, ಇತ್ರಾನ್ ಮತ್ತು ಕೆರಾನ್ ಎಂಬ ನಾಲ್ಕು ಮಂದಿ ಗಂಡು ಮಕ್ಕಳಿದ್ದರು.

[27]ಏಚೆರನಿಗೆ ಬಿಲ್ಹಾನ್, ಜಾವಾನ್ ಮತ್ತು ಅಕಾನ್ ಎಂಬ ಮೂರು ಮಂದಿ ಗಂಡುಮಕ್ಕಳಿದ್ದರು.

[28]ದೀಶಾನನಿಗೆ ಊಚ್ ಮತ್ತು ಅರಾನ್ ಎಂಬ ಇಬ್ಬರು ಗಂಡು ಮಕ್ಕಳಿದ್ದರು.

[29]ಹೋರಿಯರ ಕುಟುಂಬಗಳ ನಾಯಕರುಗಳ ಹೆಸರುಗಳು ಇಂತಿವೆ: ಲೋಟಾನ್ ಶೋಬಾಲ್, ಸಿಬೆಯೋನ್, ಅನಾಹ,
[30]ದೀಶೋನ್, ಏಚೆರ್ ಮತ್ತು ದೀಶಾನ್. ಸೇಯೀರ್‌ನಲ್ಲಿ ವಾಸವಾಗಿದ್ದ ಹೋರಿಯ ಕುಟುಂಬಗಳ ನಾಯಕರುಗಳು ಇವರೇ.
[31]ಆ ಸಮಯ ದಲ್ಲಿ ಎದೋಮಿನಲ್ಲಿ ರಾಜರುಗಳಿದ್ದರು. ಇಸ್ರೇಲರಿಗಿಂತಲೂ ಮುಂಚೆ ಎದೋಮಿಗೆ ರಾಜರುಗಳಿದ್ದರು.

[32]ಬೆಯೋರನ ಮಗನಾದ ಬೆಲಗನು ಎದೋಮಿನ ರಾಜನಾಗಿದ್ದನು. ಅವನು ದಿನ್ಹಾಬಾ ನಗರವನ್ನು ಆಳಿದನು.
[33]ಬೆಲಗನು ಸತ್ತ ಮೇಲೆ, ಯೋಬಾಬನು ರಾಜ ನಾದನು. ಯೋಬಾಬನು ಬೊಚ್ರದವನಾದ ಜೆರಹನ ಮಗನು.
[34]ಯೋಬಾಬನು ಸತ್ತಮೇಲೆ ಹುಷಾಮನು ಆಳಿದನು. ಹುಷಾಮನು ತೇಮಾನೀಯರ ದೇಶದವನು.
[35]ಹುಷಾಮನು ಸತ್ತಮೇಲೆ, ಹದದನು ಆ ದೇಶವನ್ನು ಆಳಿದನು. ಹದದನು ಬೆದದನ ಮಗನು. (ಮೊವಾಬ್ಯರನ್ನು ಮಿದ್ಯಾನರ ದೇಶದಲ್ಲಿ ಸೋಲಿಸಿದವನೇ ಬೆದದನು.) ಹದದನು ಅವೀತ್ ಪಟ್ಟಣದವನು.
[36]ಹದದನು ಸತ್ತಮೇಲೆ, ಸಮ್ಲಾಹನು ಆ ದೇಶವನ್ನು ಆಳಿದನು; ಸಮ್ಲಾಹನು ಮಸ್ರೇಕದವನು.
[37]ಸಮ್ಲಾಹನು ಸತ್ತಮೇಲೆ

ಸೌಲನು ಆ ದೇಶವನ್ನು ಆಳಿದನು. ಯೂಫ್ರೇಟೀಸ್ ನದಿ
ತೀರದಲ್ಲಿರುವ ರೆಹೋಬೋತೂರಿನವನು. 38ಸೌಲನು
ಸತ್ತಮೇಲೆ, ಆ ದೇಶವನ್ನು ಬಾಳ್ಹಾನಾನನು ಆಳಿದನು.
ಬಾಳ್ಹಾನಾನನು ಅಕ್ಬೋರನ ಮಗನು. 39ಬಾಳ್ಹಾನಾನನು
ಸತ್ತಮೇಲೆ ಆ ದೇಶವನ್ನು ಹದದನು ಆಳಿದನು. ಹದದನು
ಪಾಗು ಎಂಬ ಪಟ್ಟಣದವನು. ಹದದನ ಹೆಂಡತಿಯ
ಹೆಸರು ಮಹೇಟಬೇಲ್. ಮಹೇಟಬೇಲಳು ಮಟ್ರೇದ
ಎಂಬಾಕೆಯ ಮಗಳು. (ಮಟ್ರೇದಳು ಮೇಜಾಹಾಬನ
ಮಗಳು.) 40-43ಏಸಾವನು ಎದೋಮ್ಯರಿಗೆ ಮೂಲ ಪಿತೃ;
ತಿಮ್ನ, ಅಲ್ವಾ, ಯತೇತ, ಒಹೊಲೀಬಾಮಾ, ಏಲಾ,
ಪೀನೋನ್, ಕೆನೆಜ್, ತೇಮಾನ್, ಮಿಬ್ಚಾರ,
ಮಗ್ದೀಯೇಲ್ ಮತ್ತು ಗೀರಾಮ್ ಕುಟುಂಬಗಳವರು
ತಮ್ಮ ಕುಟುಂಬಗಳ ಹೆಸರುಗಳನ್ನು ಹೊಂದಿದ್ದ ಪ್ರದೇಶ
ಗಳಲ್ಲಿ ವಾಸಿಸಿದರು.

### ಯೋಸೇಫ ಕನಸುಗಾರ

37 ಯಾಕೋಬನು ಕಾನಾನ್ ದೇಶದಲ್ಲಿ
ನೆಲೆಸಿದನು. ಅವನ ತಂದೆ ಆ ದೇಶದಲ್ಲೇ ವಾಸ
ವಾಗಿದ್ದನು. 2ಯಾಕೋಬನ ಕುಟುಂಬದ ಚರಿತ್ರೆಯಿದು:
ಯೋಸೇಫನು ಹದಿನೇಳು ವರ್ಷದ ಯೌವನಸ್ಥ
ನಾಗಿದ್ದನು. ಆಡುಕುರಿಗಳನ್ನು ಸಾಕುವುದು ಅವನ
ಕಸುಬಾಗಿತ್ತು. ತನ್ನ ಅಣ್ಣಂದಿರೊಡನೆ ಅಂದರೆ ಬಿಲ್ಹಾ
ಮತ್ತು ಜಿಲ್ಪಾ ಎಂಬ ತನ್ನ ಮಲತಾಯಿಗಳ ಮಕ್ಕಳೊಡನೆ
ಯೋಸೇಫನು ಆಡು ಕುರಿಗಳನ್ನು ಮೇಯಿಸುತ್ತಿದ್ದನು.
ಅವರೇನಾದರೂ ಕೆಟ್ಟದ್ದನ್ನು ಮಾಡಿದರೆ ಯೋಸೇಫನು
ತಂದೆಗೆ ತಿಳಿಸುತ್ತಿದ್ದನು. 3ಇಸ್ರೇಲನು (ಯಾಕೋಬನು)
ತುಂಬ ಮುಪ್ಪಿನವನಾಗಿದ್ದಾಗ ಯೋಸೇಫನು ಹುಟ್ಟಿದ್ದ
ರಿಂದ ಇಸ್ರೇಲನು ತನ್ನ ಬೇರೆ ಗಂಡುಮಕ್ಕಳಿಗಿಂತಲೂ
ಹೆಚ್ಚಾಗಿ ಯೋಸೇಫನನ್ನು ಪ್ರೀತಿಸಿದನು. ಯಾಕೋಬನು
ತನ್ನ ಮಗನಿಗೆ ಸುಂದರವಾದ ನಿಲುವಂಗಿಯನ್ನು ಮಾಡಿಸಿ
ಕೊಟ್ಟಿದ್ದನು. 4ತಮ್ಮ ತಂದೆಗೆ ಯೋಸೇಫನ ಮೇಲೆ ಹೆಚ್ಚು
ಪ್ರೀತಿಯಿರುವುದನ್ನು ಗಮನಿಸಿದ ಯೋಸೇಫನ
ಅಣ್ಣಂದಿರು ಯೋಸೇಫನನ್ನು ದ್ವೇಷಿಸತೊಡಗಿ ಅವ
ನೊಡನೆ ಸ್ನೇಹಭಾವದಿಂದ ಮಾತಾಡುತ್ತಿರಲಿಲ್ಲ.
5ಒಂದು ದಿನ ಯೋಸೇಫನು ವಿಶೇಷವಾದ ಕನಸನ್ನು
ಕಂಡನು. ಯೋಸೇಫನು ಈ ಕನಸನ್ನು ತನ್ನ ಅಣ್ಣಂದಿರಿಗೆ
ತಿಳಿಸಿದಾಗ ಅವರು ಅವನನ್ನು ಮತ್ತಷ್ಟು ದ್ವೇಷಿಸ
ತೊಡಗಿದರು.
6ಯೋಸೇಫನು ಅವರಿಗೆ, ‘‘ನನಗೆ ಒಂದು ಕನ
ಸಾಯಿತು. 7ನಾವೆಲ್ಲರು ಹೊಲದಲ್ಲಿ ಗೋಧಿಯ ಸಿವುಡು
ಗಳನ್ನು ಕಟ್ಟುತ್ತಿದ್ದೆವು. ಆಗ ನನ್ನ ಸಿವುಡು ಎದ್ದು ನಿಂತಿತು;
ನನ್ನ ಸಿವುಡಿನ ಸುತ್ತಲೂ ನಿಮ್ಮ ಸಿವುಡುಗಳೆಲ್ಲಾ ಎದ್ದು
ನಿಂತುಕೊಂಡು ನನ್ನ ಸಿವುಡಿಗೆ ಅಡ್ಡಬಿದ್ದವು’’ ಎಂದು
ಹೇಳಿದನು.
8ಅವನ ಅಣ್ಣಂದಿರು, ‘‘ನೀನು ರಾಜನಾಗಿ ನಮ್ಮನ್ನು
ಆಳುವೆ ಎಂಬುದು ಇದರ ಅರ್ಥವೆಂದು ನಿನ್ನ ಆಲೋಚ
ನೆಯೋ?’’ ಎಂದು ಪ್ರಶ್ನಿಸಿ ಆ ಕನಸಿನ ನಿಮಿತ್ತ ಅವನನ್ನು
ಮತ್ತಷ್ಟು ದ್ವೇಷಿಸತೊಡಗಿದರು.
9ಆಮೇಲೆ ಯೋಸೇಫನಿಗೆ ಮತ್ತೊಂದು ಕನಸಾಯಿತು.
ಯೋಸೇಫನು ಈ ಕನಸಿನ ಬಗ್ಗೆಯೂ ತನ್ನ ಅಣ್ಣಂದಿರಿಗೆ
ತಿಳಿಸಿದನು. ಯೋಸೇಫನು ಅವರಿಗೆ, ‘‘ನನಗೆ
ಮತ್ತೊಂದು ಕನಸಾಯಿತು. ಸೂರ್ಯ, ಚಂದ್ರ ಮತ್ತು
ಹನ್ನೊಂದು ನಕ್ಷತ್ರಗಳು ನನಗೆ ಅಡ್ಡಬೀಳುವುದನ್ನು
ಕಂಡೆನು’’ ಎಂದು ಹೇಳಿದನು.
10ಯೋಸೇಫನು ತನ್ನ ತಂದೆಗೂ ಸಹ ಈ ಕನಸಿನ ಬಗ್ಗೆ
ತಿಳಿಸಿದನು. ಆದರೆ ಅವನ ತಂದೆ ಅವನನ್ನು ಗದರಿಸಿ,
‘‘ಇದೆಂಥಾ ಕನಸು? ನಾನೂ ನಿನ್ನ ತಾಯಿಯೂ ಮತ್ತು
ನಿನ್ನ ಸಹೋದರರೂ ನಿನಗೆ ಅಡ್ಡಬೀಳುತ್ತೇವೆಂದು
ನಂಬುತ್ತೀಯೋ?’’ ಎಂದು ಕೇಳಿದನು. 11ಯೋಸೇಫನ
ಅಣ್ಣಂದಿರಿಗೆ ಅವನ ಮೇಲೆ ಹೊಟ್ಟೆಕಿಚ್ಚು ಹೆಚ್ಚಾಯಿತು.
ಆದರೆ ಯೋಸೇಫನ ತಂದೆಯು ಆ ಕನಸುಗಳ ಬಗ್ಗೆ
ಆಶ್ಚರ್ಯಚಕಿತನಾಗಿ ಆಲೋಚಿಸತೊಡಗಿದನು.
12ಒಂದು ದಿನ ಯೋಸೇಫನ ಅಣ್ಣಂದಿರು ತಮ್ಮ
ತಂದೆಯ ಆಡುಕುರಿಗಳನ್ನು ಕಾಯಲು ಶೆಕೆಮಿಗೆ
ಹೋದರು. 13ಇಸ್ರೇಲನು (ಯಾಕೋಬನು)
ಯೋಸೇಫನಿಗೆ, ‘‘ಶೆಕೆಮಿಗೆ ಹೋಗು. ನಿನ್ನ ಅಣ್ಣಂದಿರು
ಅಲ್ಲಿ ನನ್ನ ಆಡುಕುರಿಗಳನ್ನು ಮೇಯಿಸುತ್ತಿದ್ದಾರೆ’’
ಎಂದು ಹೇಳಿದನು.
ಯೋಸೇಫನು, ‘‘ಸರಿ ಹೋಗುವೆನು’’ ಎಂದು
ಉತ್ತರಿಸಿದನು.
14ಇಸ್ರೇಲನು, ‘‘ನಿನ್ನ ಅಣ್ಣಂದಿರ ಮತ್ತು ಆಡುಕುರಿಗಳ
ಕ್ಷೇಮವನ್ನು ವಿಚಾರಿಸಿಕೊಂಡು ಬಂದು ನನಗೆ ತಿಳಿಸು’’
ಎಂದು ಹೇಳಿ ಅವನನ್ನು ಹೆಬ್ರೋನಿನ ಕಣಿವೆಯಿಂದ
ಶೆಕೆಮಿಗೆ ಕಳುಹಿಸಿಕೊಟ್ಟನು.
15ಶೆಕೆಮಿನಲ್ಲಿ ದಾರಿತಪ್ಪಿ ಯೋಸೇಫನು ಹೊಲಗಳಲ್ಲಿ
ಅಲೆದಾಡುತ್ತಿರಲು ಅವನನ್ನು ಕಂಡ ಒಬ್ಬನು, ‘‘ಏನು
ಹುಡುಕುತ್ತಿರುವೆ?’’ ಎಂದು ಕೇಳಿದನು.
16ಯೋಸೇಫನು, ‘‘ನನ್ನ ಅಣ್ಣಂದಿರನ್ನು ಹುಡುಕುತ್ತಿ
ದ್ದೇನೆ. ಅವರು ತಮ್ಮ ಆಡು ಕುರಿಗಳನ್ನು ಎಲ್ಲಿ ಮೇಯಿಸು
ತ್ತಿದ್ದಾರೆ?’’ ಎಂದು ಕೇಳಿದನು.
17ಅದಕ್ಕೆ ಅವನು, ‘‘ಅವರು ಇಲ್ಲಿಂದ ಹೊರಟು
ಹೋದರು. ದೋತಾನಿಗೆ ಹೋಗೋಣ ಎಂದು ಅವರು
ಮಾತಾಡಿಕೊಳ್ಳುವುದನ್ನು ನಾನು ಕೇಳಿದೆ’’ ಎಂದು
ಹೇಳಿದನು. ಆದುದರಿಂದ ಯೋಸೇಫನು ಅವರನ್ನು

ಹುಡುಕುತ್ತಾ ಹೋಗಿ ದೋತಾನಿನಲ್ಲಿ ಅವರನ್ನು ಕಂಡನು.

### ಯೋಸೇಫನನ್ನು ಗುಲಾಮತನಕ್ಕೆ ಮಾರಿದ್ದು

18 ಯೋಸೇಫನನ್ನು ಬಹುದೂರದಿಂದಲೇ ಕಂಡ ಅವನ ಅಣ್ಣಂದಿರು ಅವನನ್ನು ಕೊಲ್ಲಲು ಒಂದು ಉಪಾಯ ಮಾಡಿದರು. 19 ಅವರು ಒಬ್ಬರಿಗೊಬ್ಬರು, ''ಅಗೋ, ಅಲ್ಲಿ ಬರುತ್ತಿದ್ದಾನೆ ಕನಸುಗಾರನಾದ ಯೋಸೇಫ. 20 ಅವನನ್ನು ಕೊಲ್ಲಲು ಇದೇ ತಕ್ಕ ಸಮಯ. ಅವನನ್ನು ಕೊಂದು ನೀರಿಲ್ಲದ ಬಾವಿಯೊಳಗೆ ದಬ್ಬಿ, ಕ್ರೂರ ಪ್ರಾಣಿಯೊಂದು ಅವನನ್ನು ತಿಂದುಬಿಟ್ಟಿತೆಂದು ನಮ್ಮ ತಂದೆಗೆ ಹೇಳೋಣ. ಆಗ ಅವನ ಕನಸುಗಳೆಲ್ಲ ಹೇಗೆ ನಿಜವಾಗುತ್ತವೊ ನೋಡೋಣ'' ಎಂದು ಮಾತಾಡಿಕೊಂಡರು.

21 ಆದರೆ ರೂಬೇನನು ಅವರಿಗೆ, ''ಅವನನ್ನು ಕೊಲ್ಲಬೇಡಿ; 22 ಅರಣ್ಯದಲ್ಲಿರುವ ಬರಿದಾದ ಬಾವಿಗೆ ಅವನನ್ನು ನೂಕಿಬಿಡಿ; ಆದರೆ ಅವನಿಗೆ ನೋವು ಮಾಡಬೇಡಿ'' ಎಂದು ಹೇಳಿದನು. ತರುವಾಯ ಯೋಸೇಫನನ್ನು ಬಾವಿಯಿಂದ ಮೇಲೆತ್ತಿ ತಂದೆಗೆ ಅವನನ್ನು ಒಪ್ಪಿಸಬೇಕೆಂಬುದೇ ರೂಬೇನನ ಅಪೇಕ್ಷೆಯಾಗಿತ್ತು. 23 ಯೋಸೇಫನು ಬಂದಾಗ ಅವನ ಅಣ್ಣಂದಿರು ಅವನನ್ನು ಹಿಡಿದು ಅವನ ನಿಲುವಂಗಿಯನ್ನು ಹರಿದುಹಾಕಿ 24 ನೀರಿಲ್ಲದ ಒಂದು ಬಾವಿಯೊಳಗೆ ತಳ್ಳಿದರು.

25 ಯೋಸೇಫನು ಬಾವಿಯೊಳಗಿದ್ದಾಗ, ಅವನ ಅಣ್ಣಂದಿರು ಊಟಕ್ಕೆ ಕುಳಿತುಕೊಂಡರು. ಅವರು ಕಣ್ಣೆತ್ತಿ ನೋಡಿದಾಗ ಗಿಲ್ಯಾದಿನಿಂದ ಈಜಿಪ್ಟಿಗೆ ಹೋಗುತ್ತಿದ್ದ ವ್ಯಾಪಾರಿಗಳನ್ನು ಕಂಡರು. ಅವರ ಒಂಟೆಗಳು ಅನೇಕ ಬಗೆಯ ಸಾಂಬಾರ ಪದಾರ್ಥಗಳನ್ನು ಮತ್ತು ಬೆಲೆ ಬಾಳುವ ವಸ್ತುಗಳನ್ನು ಹೊತ್ತುಕೊಂಡು ಹೋಗುತ್ತಿದ್ದವು.
26 ಆದ್ದರಿಂದ ಯೆಹೂದನು ತನ್ನ ಸಹೋದರರಿಗೆ, ''ನಾವು ನಮ್ಮ ತಮ್ಮನನ್ನು ಕೊಂದು ಅವನ ಮರಣವನ್ನು ಮರೆಮಾಡಿದರೆ ನಮಗಾಗುವ ಲಾಭವೇನು? 27 ಈ ವ್ಯಾಪಾರಿಗಳಿಗೆ ನಾವು ಅವನನ್ನು ಮಾರಿದರೆ ನಮಗೆ ಹೆಚ್ಚು ಲಾಭವಾಗುವುದು; ಆಮೇಲೆ ನಮ್ಮ ತಮ್ಮನನ್ನು ಕೊಂದ ಅಪರಾಧವೂ ನಮ್ಮ ಮೇಲಿರುವುದಿಲ್ಲ'' ಎಂದು ಹೇಳಿದನು. ಅದಕ್ಕೆ ಉಳಿದ ಸಹೋದರರೆಲ್ಲ ಒಪ್ಪಿಕೊಂಡರು. 28 ಮಿದ್ಯಾನಿನ ವ್ಯಾಪಾರಿಗಳು ಸಮೀಪಿಸಿದಾಗ, ಅಣ್ಣಂದಿರು ಯೋಸೇಫನನ್ನು ಬಾವಿಯೊಳಗಿಂದ ಹೊರತೆಗೆದು ಇಪ್ಪತ್ತು ಬೆಳ್ಳಿಯ ನಾಣ್ಯಗಳಿಗೆ ಮಾರಿದರು. ವ್ಯಾಪಾರಿಗಳು ಯೋಸೇಫನನ್ನು ಈಜಿಪ್ಟಿಗೆ ಕೊಂಡೊಯ್ದರು.

29 ಆ ಸಮಯದಲ್ಲಿ ರೂಬೇನನು ತನ್ನ ಸಹೋದರರೊಡನೆ ಇರಲಿಲ್ಲ. ಅವರು ಯೋಸೇಫನನ್ನು ಮಾರಿದ್ದು ಅವನಿಗೆ ಗೊತ್ತಿರಲಿಲ್ಲ. ರೂಬೇನನು ಬಾವಿಗೆ ಹಿಂತಿರುಗಿ ಬಂದಾಗ, ಯೋಸೇಫನನ್ನು ಅಲ್ಲಿ ಕಾಣದೆ ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡನು. 30 ರೂಬೇನನು ತನ್ನ ಸಹೋದರರ ಬಳಿಗೆ ಹೋಗಿ, ''ಹುಡುಗನು ಬಾವಿಯೊಳಗೆ ಇಲ್ಲ. ಈಗ ನಾನೇನು ಮಾಡಲಿ?'' ಎಂದು ಕೇಳಿದನು. 31 ಬಳಿಕ ಅವರು ಒಂದು ಆಡನ್ನು ಕತ್ತರಿಸಿ ಆಡಿನ ರಕ್ತವನ್ನು ಯೋಸೇಫನ ಸುಂದರವಾದ ನಿಲುವಂಗಿಯ ಮೇಲೆ ಹಾಕಿದರು. 32 ಬಳಿಕ ಆ ನಿಲುವಂಗಿಯನ್ನು ತಮ್ಮ ತಂದೆಯ ಬಳಿಗೆ ತೆಗೆದುಕೊಂಡು ಹೋಗಿ, ''ನಾವು ಈ ನಿಲುವಂಗಿಯನ್ನು ಕಂಡೆವು. ಇದು ಯೋಸೇಫನ ನಿಲುವಂಗಿಯೋ?'' ಎಂದು ಕೇಳಿದರು.

33 ತಂದೆಯು ಆ ನಿಲುವಂಗಿಯನ್ನು ನೋಡಿ ಅದನ್ನು ಗುರುತಿಸಿ, ''ಹೌದು, ಇದು ಯೋಸೇಫನದೇ. ಯಾವುದೊ ಕ್ರೂರಪ್ರಾಣಿಯ ಬಾಯಿಗೆ ತುತ್ತಾದನು'' ಎಂದು ಹೇಳಿ 34 ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು ಗೋಣಿತಟ್ಟನ್ನು ಸುತ್ತಿಕೊಂಡು ಬಹುದಿನಗಳವರೆಗೆ ದುಃಖಪಟ್ಟನು. 35 ಯಾಕೋಬನ ಗಂಡು ಮಕ್ಕಳು ಮತ್ತು ಹೆಣ್ಣು ಮಕ್ಕಳು ಎಷ್ಟೇ ಸಂತೈಸಿದರೂ ಯಾಕೋಬನಿಗೆ ಆದರಣೆಯಾಗಲಿಲ್ಲ. ಯಾಕೋಬನು ಅವರಿಗೆ, ''ನಾನು ಸಾಯುವ ತನಕ ನನ್ನ ಮಗನಿಗಾಗಿ ದುಃಖಪಡುವೆ'' ಎಂದು ಹೇಳಿ ದುಃಖಿಸುತ್ತಲೇ ಇದ್ದನು.

36 ಮಿದ್ಯಾನಿನ ವ್ಯಾಪಾರಿಗಳು ಯೋಸೇಫನನ್ನು ಈಜಿಪ್ಟಿನಲ್ಲಿ ಮಾರಿದರು. ಅವರು ಅವನನ್ನು ಫರೋಹನ ಕಾವಲುಗಾರರಿಗೆ ನಾಯಕನಾಗಿದ್ದ ಪೋಟೀಫರನಿಗೆ ಮಾರಿದರು.

### ಯೆಹೂದನು ಮತ್ತು ತಾಮಾರಳು

38 ಆ ಕಾಲದಲ್ಲಿ ಯೆಹೂದನು ತನ್ನ ಸಹೋದರರನ್ನು ಬಿಟ್ಟು ಹೀರಾ ಎಂಬುವನೊಂದಿಗೆ ವಾಸಿಸಲು ಹೋದನು. ಹೀರನು ಅದುಲ್ಲಾಮ್ ಊರಿನವನು. 2 ಯೆಹೂದನು ಅಲ್ಲಿ ಒಬ್ಬ ಕಾನಾನ್ಯನ ಮಗಳನ್ನು ಕಂಡು ಆಕೆಯನ್ನು ಮದುವೆಮಾಡಿಕೊಂಡನು. ಆ ಹುಡುಗಿಯ ತಂದೆಯ ಹೆಸರು ಶೂಗ. 3 ಆಕೆಯು ಒಬ್ಬ ಮಗನನ್ನು ಹೆತ್ತಳು. ಅವರು ಅವನಿಗೆ ಏರ ಎಂದು ಹೆಸರಿಟ್ಟರು. 4 ಬಳಿಕ ಆಕೆ ಮತ್ತೊಬ್ಬ ಮಗನಿಗೆ ಜನನವಿತ್ತಳು. ಅವರು ಆ ಮಗನಿಗೆ ಓನಾನ ಎಂದು ಹೆಸರಿಟ್ಟರು. 5 ಆಕೆಗೆ ಮೂರನೆಯ ಮಗನು ಹುಟ್ಟಿದಾಗ ಆಕೆ ಅದಕ್ಕೆ ಶೇಲಹ ಎಂದು ಹೆಸರಿಟ್ಟಳು. ಆ ಮಗು ಹುಟ್ಟಿದಾಗ ಯೆಹೂದನು ಕಜೀಬೂರಿನಲ್ಲಿ ವಾಸಿಸುತ್ತಿದ್ದನು.

[6]ಯೆಹೂದನು ತನ್ನ ಮೊದಲನೆ ಮಗನಾದ ಏರನಿಗಾಗಿ
ಒಬ್ಬ ಕನ್ನಿಕೆಯನ್ನು ಆಯ್ಕೆಮಾಡಿದನು. ಆಕೆಯ ಹೆಸರು
ತಾಮಾರ. [7]ಆದರೆ ಏರನು ಅನೇಕ ಕೆಟ್ಟಕಾರ್ಯಗಳನ್ನು
ಮಾಡಿದ್ದರಿಂದ ಯೆಹೋವನು ಅವನನ್ನು ಸಾಯಿಸಿದನು.
[8]ಆಗ ಯೆಹೂದನು ಏರನ ತಮ್ಮನಾದ ಓನಾನನಿಗೆ,
''ಹೋಗು, ಸತ್ತುಹೋದ ನಿನ್ನ ಅಣ್ಣನ ಹೆಂಡತಿಗೆ ಗಂಡ
ನಂತಿರು. ನಿನ್ನ ಮೂಲಕ ಆಕೆಯಲ್ಲಿ ಹುಟ್ಟುವ ಮಕ್ಕಳು
ನಿನ್ನ ಅಣ್ಣನಾದ ಏರನ ಮಕ್ಕಳಾಗಿರಲಿ'' ಎಂದು
ಹೇಳಿದನು.

[9]ತಾಮಾರಳಲ್ಲಿ ತನಗೆ ಹುಟ್ಟುವ ಮಕ್ಕಳು ತನ್ನವರಾಗು
ವುದಿಲ್ಲವೆಂದು ಅರಿತುಕೊಂಡು ಓನಾನನು ಆಕೆಯನ್ನು
ಕೂಡಿದರೂ ವೀರ್ಯವನ್ನು ನೆಲದ ಪಾಲು ಮಾಡು
ತ್ತಿದ್ದನು. [10]ಇದು ಯೆಹೋವನ ದೃಷ್ಟಿಯಲ್ಲಿ ಕೆಟ್ಟದ್ದಾಗಿದ್ದ
ರಿಂದ ಆತನು ಓನಾನನನ್ನು ಸಹ ಸಾಯಿಸಿದನು. [11]ಆಗ
ಯೆಹೂದನು ತನ್ನ ಸೊಸೆಯಾದ ತಾಮಾರಳಿಗೆ, ''ನಿನ್ನ
ತಂದೆಯ ಮನೆಗೆ ಹಿಂತಿರುಗಿಹೋಗಿ ಅಲ್ಲಿರು. ನನ್ನ ಮಗ
ನಾದ ಶೇಲಹನು ದೊಡ್ಡವನಾಗುವ ತನಕ ಮದುವೆ
ಯಾಗಬೇಡ'' ಎಂದು ಹೇಳಿದನು.

ಶೇಲಹನು ಸಹ ತನ್ನ ಅಣ್ಣಂದಿರಂತೆ ಸಾಯಬಹು
ದೆಂದು ಯೆಹೂದನು ಹೆದರಿಕೊಂಡಿದ್ದನು. ಆದ್ದರಿಂದ
ತಾಮಾರಳು ತನ್ನ ತಂದೆಯ ಮನೆಗೆ ಹಿಂತಿರುಗಿ
ಹೋದಳು.

[12]ಆಮೇಲೆ ಬಹುದಿನಗಳಾದ ಮೇಲೆ ಯೆಹೂದನ
ಹೆಂಡತಿಯಾಗಿದ್ದ ಶೂಗನ ಮಗಳು ತೀರಿಕೊಂಡಳು.
ಯೆಹೂದನು ತನ್ನ ದುಃಖದ ಸಮಯ ತೀರಿದ ಮೇಲೆ
ಅದುಲ್ಲಾಮ್ಯದವನಾದ ತನ್ನ ಸ್ನೇಹಿತ ಹೀರಾನೊಂದಿಗೆ
ತನ್ನ ಕುರಿಗಳ ಉಣ್ಣೆ ಕತ್ತರಿಸುವುದಕ್ಕಾಗಿ ತಿಮ್ನಾ ಊರಿಗೆ
ಹೋದನು. [13]ಮಾವನು ಉಣ್ಣೆ ಕತ್ತರಿಸುವುದಕ್ಕಾಗಿ
ತಿಮ್ನಾ ಊರಿಗೆ ಹೋಗುತ್ತಿರುವುದು ತಾಮಾರಳಿಗೆ ತಿಳಿ
ಯಿತು. [14]ತಾಮಾರಳು ಯಾವಾಗಲೂ ವಿಧವೆಯ ವಸ್ತ್ರಗ
ಳನ್ನು ಧರಿಸಿಕೊಂಡಿರುತ್ತಿದ್ದಳು. ಆದರೆ ಈಗ ಆಕೆ ಬೇರೆ
ಬಟ್ಟೆಗಳನ್ನು ಧರಿಸಿಕೊಂಡು ತನ್ನ ಮುಖವನ್ನು ಮುಸುಕಿ
ನಿಂದ ಮುಚ್ಚಿಕೊಂಡು ತಿಮ್ನಾ ಊರಿನ ಸಮೀಪದಲ್ಲಿ
ರುವ ಏನಯಿಮೂರಿನ ದಾರಿಯಲ್ಲಿ ಕುಳಿತುಕೊಂಡಳು.
ಯೆಹೂದನ ಚಿಕ್ಕಮಗನಾದ ಶೇಲಹನು ಬೆಳೆದು ದೊಡ್ಡ
ವನಾಗಿರುವುದು ತಾಮಾರಳಿಗೆ ತಿಳಿದಿತ್ತು. ಆದರೆ ಆಕೆಗೆ
ಅವನನ್ನು ಮದುವೆ ಮಾಡಿಸಲು ಯೆಹೂದನು
ಆಲೋಚಿಸಿರಲಿಲ್ಲ.

[15]ಯೆಹೂದನು ಆ ದಾರಿಯಲ್ಲಿ ಪ್ರಯಾಣ ಮಾಡು
ತ್ತಿರಲು ಆಕೆಯನ್ನು ಕಂಡು ವೇಶ್ಯೆಯೆಂದು ಭಾವಿಸಿದನು.
(ಆಕೆಯು ವೇಶ್ಯೆಯಂತೆ ಮುಸುಕು ಹಾಕಿಕೊಂಡಿದ್ದಳು.)
[16]ಆದ್ದರಿಂದ ಯೆಹೂದನು ಆಕೆಯ ಬಳಿಗೆ ಹೋಗಿ,
''ನಾನು ನಿನ್ನನ್ನು ಕೂಡಬಹುದೇ?'' ಎಂದು ಕೇಳಿದನು.
(ಆಕೆ ತನ್ನ ಸೊಸೆಯಾದ ತಾಮಾರಳೆಂದು ಯೆಹೂದನಿಗೆ
ತಿಳಿದಿರಲಿಲ್ಲ.)

ಅವಳು ''ನೀನು ನನಗೆ ಏನು ಕೊಡುವೆ'' ಎಂದು
ಕೇಳಿದಳು.

[17]ಯೆಹೂದನು, ''ನನ್ನ ಮಂದೆಯಿಂದ ನಿನಗೆ ಒಂದು
ಆಡುಮರಿಯನ್ನು ಕಳುಹಿಸಿಕೊಡುವೆ'' ಎಂದು
ಉತ್ತರಿಸಿದನು.

ಅವಳು ''ಸರಿ, ನೀನು ನನಗೆ ಆಡುಮರಿಯನ್ನು ಕಳು
ಹಿಸಿಕೊಡುವ ತನಕ ನನ್ನಲ್ಲಿ ಏನಾದರೂ ಒತ್ತೆಯಿಡ
ಬೇಕು'' ಎಂದು ಹೇಳಿದಳು. [18]ಯೆಹೂದನು, ''ಏನು
ಒತ್ತೆಯಿಡಲಿ?'' ಎಂದು ಕೇಳಿದನು.

ತಾಮಾರಳು, ''ನಿನ್ನ ಪತ್ರಗಳ ಮೇಲೆ ಉಪಯೋಗಿ
ಸುವ ನಿನ್ನ ಮುದ್ರೆಯನ್ನೂ ಅದರ ದಾರವನ್ನೂ ಮತ್ತು
ನಿನ್ನ ಊರುಗೋಲನ್ನೂ ಕೊಡು'' ಎಂದು ಉತ್ತರಿ
ಸಿದಳು. ಯೆಹೂದನು ಅವುಗಳನ್ನು ಆಕೆಗೆ ಕೊಟ್ಟನು.
ಯೆಹೂದನು ಆಕೆಯನ್ನು ಕೂಡಿದನು; ಅವಳು ಗರ್ಭಿಣಿ
ಯಾದಳು. [19]ತಾಮಾರಳು ಮನೆಗೆ ಹೋಗಿ ಮುಸುಕನ್ನು
ತೆಗೆದುಹಾಕಿ ಮತ್ತೆ ವಿಧವಾ ವಸ್ತ್ರಗಳನ್ನು ಧರಿಸಿಕೊಂಡಳು.

[20]ಯೆಹೂದನು ಮಾತು ಕೊಟ್ಟಿದ್ದಂತೆಯೇ ಒಂದು
ಆಡುಮರಿಯನ್ನು ತನ್ನ ಸ್ನೇಹಿತನಾದ ಹೀರಾನ ಮೂಲಕ
ಏನಯಿಮಿಗೆ ಕಳುಹಿಸಿ ಆ ಮುದ್ರೆಯನ್ನೂ ಊರು
ಗೋಲನ್ನೂ ತೆಗೆದುಕೊಂಡು ಬರುವಂತೆ ಅವನಿಗೆ ತಿಳಿ
ಸಿದನು. ಆದರೆ ಅವನು ಅವಳನ್ನು ಕಂಡುಹಿಡಿಯ
ಲಾಗಲಿಲ. [21]ಅವನು ಏನಯಿಮ್ ಊರಿನ ಕೆಲವು
ಗಂಡಸರಿಗೆ, ''ಇಲ್ಲಿಯ ದಾರಿಯ ಸಮೀಪದಲ್ಲಿರುತ್ತಿದ್ದ
ವೇಶ್ಯೆಯು ಎಲ್ಲಿದ್ದಾಳೆ?'' ಎಂದು ಕೇಳಿದನು.

ಅದಕ್ಕೆ ಅವರು, ''ಇಲ್ಲಿ ಯಾವ ವೇಶ್ಯೆಯೂ ಇಲ್ಲ''
ಎಂದು ಉತ್ತರಿಸಿದರು.

[22]ಆದ್ದರಿಂದ ಅವನು ಯೆಹೂದನ ಬಳಿಗೆ ಹಿಂತಿರುಗಿ
ಬಂದು, ''ನಾನು ಆ ವೇಶ್ಯೆಯನ್ನು ಕಂಡು ಹಿಡಿಯಲಾಗ
ಲಿಲ್ಲ. ಅದಲ್ಲದೆ ಆ ಸ್ಥಳದ ಗಂಡಸರು ಅಲ್ಲಿ ಒಬ್ಬ
ವೇಶ್ಯೆಯೂ ಇಲ್ಲ ಎಂದು ಹೇಳಿದರು'' ಅಂದನು.

[23]ಅದಕ್ಕೆ ಯೆಹೂದನು, ''ಆಕೆ ಆ ವಸ್ತುಗಳನ್ನು ಇಟ್ಟು
ಕೊಳ್ಳಲಿ. ಜನರು ನಮ್ಮನ್ನು ಕಂಡು ನಗುವುದು ನನಗೆ
ಇಷ್ಟವಿಲ್ಲ ನಾನು ಅವಳಿಗೆ ಆಡನ್ನು ಕೊಡಲು ಪ್ರಯತ್ನಿ
ಸಿದೆ. ಆದರೆ ಅವಳು ನಿನಗೆ ಸಿಕ್ಕಲಿಲ್ಲವಷ್ಟೇ'' ಎಂದು
ಹೇಳಿದನು.

### ತಾಮಾರಳಿಗೆ ಗರ್ಭಧಾರಣೆ

[24]ಮೂರು ತಿಂಗಳಾದ ಬಳಿಕ, ಯಾರೋ ಒಬ್ಬನು
ಯೆಹೂದನಿಗೆ, ''ನಿನ್ನ ಸೊಸೆಯಾದ ತಾಮಾರಳು

ವ್ಯಭಿಚಾರದಿಂದ ಗರ್ಭಿಣಿಯಾಗಿದ್ದಾಳೆ’’ ಎಂದು
ತಿಳಿಸಿದನು.
ಆಗ ಯೆಹೂದನು, ‘‘ಆಕೆಯನ್ನು ಎಳೆದುಕೊಂಡು
ಹೋಗಿ ಸುಟ್ಟುಬಿಡಿ’’ ಎಂದು ಹೇಳಿದನು.
25‘‘ಆ ಗಂಡಸರು ತಾಮಾರಳನ್ನು ಕೊಲ್ಲಲು ಆಕೆಯ
ಬಳಿಗೆ ಹೋದರು. ಆದರೆ ಆಕೆ ತನ್ನ ಮಾವನಿಗೆ, ‘‘ನನ್ನನ್ನು
ಗರ್ಭಿಣಿ ಮಾಡಿದವನು ಈ ವಸ್ತುಗಳ ಒಡೆಯ. ಈ ವಸ್ತು
ಗಳನ್ನು ನೋಡು! ಇವು ಯಾರವು? ಈ ಮುದ್ರೆಯೂ
ದಾರವೂ ಯಾರವು? ಇದು ಯಾರ ಕೈಕೋಲು?’’ ಎಂಬ
ಸಂದೇಶವನ್ನು ಹೇಳಿ ಕಳುಹಿಸಿದಳು.
26ಯೆಹೂದನು ಆ ವಸ್ತುಗಳನ್ನು ಗುರುತಿಸಿ, ‘‘ಆಕೆ ಸರಿ
ಯಾದದ್ದನ್ನೇ ಮಾಡಿದ್ದಾಳೆ. ನಾನೇ ತಪ್ಪು ಮಾಡಿದೆ.
ನಾನು ಆಕೆಗೆ ಮಾತುಕೊಟ್ಟಂತೆ ನನ್ನ ಮಗನಾದ ಶೇಲಹ
ನನ್ನು ಆಕೆಗೆ ಕೊಡಬೇಕಿತ್ತು’’ ಎಂದು ಹೇಳಿದನು. ಆದರೆ
ಯೆಹೂದನು ಆಕೆಯೊಡನೆ ಮತ್ತೆ ಮಲಗಿಕೊಳ್ಳಲಿಲ್ಲ.
27ತಾಮಾರಳಿಗೆ ಹೆರಿಗೆಕಾಲ ಬಂತು. ಆಕೆಗೆ ಅವಳಿ
ಜವಳಿ ಮಕ್ಕಳಾಗುವುದನ್ನು ದಾದಿಯು ಗಮನಿಸಿದಳು.
28ಆಕೆಗೆ ಹೆರಿಗೆಯಾಗುವಾಗ ಒಂದು ಮಗು ತನ್ನ ಕೈಚಾ
ಚಿತು. ದಾದಿಯು ಆ ಮಗುವಿನ ಕೈಗೆ ಕೆಂಪುದಾರವನ್ನು
ಕಟ್ಟಿ, ‘‘ಮೊದಲನೆಯವನು’’ ಅಂದಳು. 29ಆದರೆ ಆ
ಮಗು ತನ್ನ ಕೈಯನ್ನು ಹಿಂದಕ್ಕೆ ಎಳೆದುಕೊಂಡಿತು.
ಆಮೇಲೆ ಮತ್ತೊಂದು ಮಗುವು ಮೊದಲು ಹುಟ್ಟಿತು.
ಆದ್ದರಿಂದ ದಾದಿಯು, ‘‘ನೀನು ಮೊದಲನೆಯವನನ್ನು
ಛೇದಿಸಿಕೊಂಡು ಬಂದೆ’’ ಅಂದಳು. ಆದ್ದರಿಂದ ಅವರು
ಆ ಮಗುವಿಗೆ ‘‘ಪೆರೆಚ್’’* ಎಂದು ಹೆಸರಿಟ್ಟರು. 30ಆ
ಬಳಿಕ ಮತ್ತೊಂದು ಮಗುವು ಹೊರಬಂದಿತು. ಆ ಮಗು
ವಿನ ಕೈಯಲ್ಲಿ ಕೆಂಪುದಾರವಿತ್ತು. ಅವರು ಅವನಿಗೆ ‘ಜೆರಹ’
ಎಂದು ಹೆಸರಿಟ್ಟರು.

### ಈಜಿಪ್ಟಿನಲ್ಲಿ ಯೋಸೇಫನನ್ನು ಪೋಟೀಫರನಿಗೆ ಮಾರಿದ್ದು

39 ಯೋಸೇಫನನ್ನು ಖರೀದಿಮಾಡಿದ ವ್ಯಾಪಾರಿ
ಗಳು ಅವನನ್ನು ಈಜಿಪ್ಟಿಗೆ ತೆಗೆದುಕೊಂಡು
ಬಂದು ಫರೋಹನ ಕಾವಲುಗಾರರ ನಾಯಕನಾದ
ಪೋಟೀಫರನಿಗೆ ಮಾರಿದರು. 2ಆದರೆ ಯೆಹೋವನ
ಸಹಾಯದಿಂದ ಯೋಸೇಫನು ಏಳಿಗೆಯಾಗಿ ತನ್ನ
ಯಜಮಾನನಾದ ಈಜಿಪ್ಟಿನ ಪೋಟೀಫರನ ಮನೆಯಲ್ಲಿ
ಸೇವಕನಾದನು.
3ಯೆಹೋವನು ಯೋಸೇಫನ ಸಂಗಡವಿದ್ದು ಅವ
ನನ್ನು ಎಲ್ಲಾ ಕೆಲಸಕಾರ್ಯಗಳಲ್ಲಿ ಯಶಸ್ವಿಯಾಗುವಂತೆ
ಮಾಡುತ್ತಿರುವುದನ್ನು ಪೋಟೀಫರನು ಗಮನಿಸಿದನು.
4ಪೋಟೀಫರನು ಯೋಸೇಫನ ವಿಷಯದಲ್ಲಿ ತುಂಬ
ಸಂತೋಷಪಟ್ಟು ಸ್ವಂತ ಸೇವಕನನ್ನಾಗಿ ಮಾಡಿಕೊಂಡನು;
ಅಲ್ಲದೆ ಮನೆಯ ಮೇಲ್ವಿಚಾರಣೆಯನ್ನು ಒಪ್ಪಿಸಿ
ಕೊಟ್ಟನು; ತನ್ನ ಆಸ್ತಿಗೆಲ್ಲಾ ಮೇಲಾಧಿಕಾರಿಯನ್ನಾಗಿ
ನೇಮಿಸಿದನು. 5ಪೋಟೀಫರನು ಯೋಸೇಫನಿಗೆ
ಮನೆಯ ಮೇಲ್ವಿಚಾರಣೆಯನ್ನೂ ಆಸ್ತಿಗೆ ಜವಾಬ್ದಾರನ
ನ್ನಾಗಿಯೂ ಮಾಡಿದ ಮೇಲೆ ಯೆಹೋವನು ಪೋಟೀಫ
ರನ ಮನೆಯನ್ನೂ ಬೆಳೆಗಳನ್ನೂ ಆಸ್ತಿಯನ್ನೂ ಆಶೀರ್ವದಿ
ಸಿದನು. 6ಆದ್ದರಿಂದ ಪೋಟೀಫರನು ತಾನು ಊಟ
ಮಾಡುವ ಆಹಾರವೊಂದನ್ನು ಬಿಟ್ಟು ಉಳಿದೆಲ್ಲದರ
ಜವಾಬ್ದಾರಿಯನ್ನು ಯೋಸೇಫನಿಗೆ ವಹಿಸಿ ನಿಶ್ಚಿಂತೆ
ಯಿಂದ ಇದ್ದನು.

### ಯೋಸೇಫನು ಪೋಟೀಫರನ ಹೆಂಡತಿಯನ್ನು ತಿರಸ್ಕರಿಸಿದ್ದು

ಯೋಸೇಫನು ಸುಂದರವಾಗಿದ್ದನು, ನೋಡಲು,
ರೂಪವಂತನಾಗಿದ್ದನು. 7ಸ್ವಲ್ಪ ಕಾಲದನಂತರ,
ಯೋಸೇಫನ ಒಡೆಯನ ಹೆಂಡತಿಯು ಯೋಸೇಫನ
ಮೇಲೆ ಆಸೆಪಟ್ಟಳು. ಒಂದು ದಿನ ಆಕೆ ಅವನಿಗೆ,
‘‘ನನ್ನೊಂದಿಗೆ ಮಲಗಿಕೊ’’ ಎಂದು ಹೇಳಿದಳು.
8ಆದರೆ ಯೋಸೇಫನು ತಿರಸ್ಕರಿಸಿದನು. ಅವನು, ‘‘ನನ್ನ
ದಣಿಯು ಈ ಮನೆಯ ಜವಾಬ್ದಾರಿಕೆಗಳನ್ನೆಲ್ಲಾ ನನಗೆ
ವಹಿಸಿ ನಿಶ್ಚಿಂತೆಯಿಂದಿದ್ದಾನೆ. 9ನನ್ನ ದಣಿಯು ಈ
ಮನೆಯ ಸರ್ವಾಧಿಕಾರವನ್ನು ನನಗೆ ಕೊಟ್ಟಿದ್ದರೂ ತನ್ನ
ಧರ್ಮಪತ್ನಿಯಾದ ನಿನ್ನನ್ನು ನನಗೆ ಅಧೀನಪಡಿಸಿಲ್ಲ.
ಹೀಗಿರಲು ಇಂಥಾ ಮಹಾ ದುಷ್ಕೃತ್ಯವನ್ನು ನಡೆಸಿ ದೇವ
ರಿಗೆ ವಿರುದ್ಧವಾಗಿ ಹೇಗೆ ಪಾಪಮಾಡಲಿ’’ ಎಂದು ಉತ್ತರ
ಕೊಟ್ಟನು.
10ಆ ಸ್ತ್ರೀಯು ಪ್ರತಿದಿನವೂ ಯೋಸೇಫನನ್ನು ಒತ್ತಾ
ಯಿಸಿದಳು. ಆದರೆ ಯೋಸೇಫನು ಆಕೆಯೊಂದಿಗೆ ಮಲಗಿ
ಕೊಳ್ಳಲು ಒಪ್ಪಲಿಲ್ಲ. 11ಒಂದು ದಿನ ಯೋಸೇಫನು ತನ್ನ
ಕೆಲಸದ ನಿಮಿತ್ತ ಮನೆಯೊಳಗೆ ಹೋದನು. ಆಗ ಮನೆ
ಯಲ್ಲಿ ಇದ್ದವನು ಅವನೊಬ್ಬನೇ. 12ಅವನ ಧಣಿಯ
ಹೆಂಡತಿಯು ಅವನ ಮೇಲಂಗಿಯನ್ನು ಹಿಡಿದುಕೊಂಡು,
‘‘ಬಾ ನನ್ನೊಂದಿಗೆ ಮಲಗಿಕೊ’’ ಎಂದು ಕರೆದಳು.
ಕೂಡಲೇ ಯೋಸೇಫನು ತನ್ನ ಮೇಲಂಗಿಯನ್ನೇ ಬಿಟ್ಟು
ಅಲ್ಲಿಂದ ಓಡಿಹೋದನು.
13ಯೋಸೇಫನು ತನ್ನ ಮೇಲಂಗಿಯನ್ನು ಬಿಟ್ಟು
ಓಡಿಹೋದದ್ದರಿಂದ ಸಿಟ್ಟುಗೊಂಡ ಅವಳು 14ಮನೆಯ
ಹೊರಗಿದ್ದ ಸೇವಕರನ್ನು ಕರೆದು, ‘‘ನೋಡಿ, ನಮಗೆ ಅವ
ಮಾನ ಮಾಡುವುದಕ್ಕಾಗಿ ಈ ಇಬ್ರಿಯ ಗುಲಾಮನನ್ನು
ಇಲ್ಲಿಗೆ ತರಲಾಗಿದೆ. ಅವನು ಮನೆಯೊಳಗೆ ಬಂದು ನನ್ನ
ಮೇಲೆ ಬಲಾತ್ಕಾರ ಮಾಡಲು ಪ್ರಯತ್ನಿಸಿದ. ಆಗ ನಾನು

**ಪೆರೆಚ್** ಈ ಹೆಸರಿನ ಅರ್ಥ: ‘‘ಮುನ್ನುಗ್ಗಿ ಬಾ.’’

ಗಟ್ಟಿಯಾಗಿ ಕೂಗಿಕೊಂಡೆ. 15ನನ್ನ ಕೂಗಿನಿಂದ ಭಯ
ಗೊಂಡು ತನ್ನ ಮೇಲಂಗಿಯನ್ನೇ ಬಿಟ್ಟು ಓಡಿಹೋದ’’
ಎಂದು ಹೇಳಿದಳು. 16ಆಕೆ ಆ ಮೇಲಂಗಿಯನ್ನು ತನ್ನ
ಗಂಡನೂ ಯೋಸೇಫನಿಗೆ ದಣಿಯೂ ಆಗಿದ್ದ ಪೋಟೀಫ
ರನು ಬರುವ ತನಕ ಇಟ್ಟುಕೊಂಡಿದ್ದಳು. 17ಪತಿಯು
ಬಂದಾಗ ಆಕೆ ಅದೇ ರೀತಿ ಹೇಳಿ, ‘‘ನೀನು ಸೇರಿಸಿಕೊಂಡ
ಈ ಇಬ್ರಿಯ ಗುಲಾಮನು ನನ್ನ ಮೇಲೆ ಬಲಾತ್ಕಾರ
ಮಾಡಲು ಪ್ರಯತ್ನಿಸಿದ. 18ಆದರೆ ನಾನು ಕೂಗಿಕೊಂಡ
ದ್ದರಿಂದ ಅವನು ಮೇಲಂಗಿಯನ್ನೇ ಬಿಟ್ಟು ಓಡಿಹೋದ’’
ಎಂದು ಹೇಳಿದಳು.

### ಯೋಸೇಫನಿಗೆ ಸೆರೆವಾಸ

19ಯೋಸೇಫನ ಧಣಿಯು ತನ್ನ ಹೆಂಡತಿಯ ಮಾತು
ಕೇಳಿ ತುಂಬ ಕೋಪಗೊಂಡನು. 20ರಾಜನ ವೈರಿಗಳನ್ನು
ಹಾಕುವ ಒಂದು ಸೆರೆಮನೆಯಿತ್ತು. ಆದ್ದರಿಂದ ಪೋಟೀಫ
ರನು ಯೋಸೇಫನನ್ನು ಆ ಸೆರೆಮನೆಗೆ ಹಾಕಿಸಿದನು. ಅಂದಿ
ನಿಂದ ಯೋಸೇಫನು ಅಲ್ಲಿದ್ದನು.

21ಆದರೆ ಯೆಹೋವನು ಯೋಸೇಫನ ಸಂಗಡವಿದ್ದು
ಕರುಣೆ ತೋರಿದನು. ಸ್ವಲ್ಪಕಾಲವಾದ ಮೇಲೆ ಸೆರೆ
ಮನೆಯ ಮುಖ್ಯಾಧಿಕಾರಿಯು ಯೋಸೇಫನನ್ನು ಪ್ರೀತಿಸ
ತೊಡಗಿದನು. 22ಅವನು ಎಲ್ಲಾ ಕೈದಿಗಳನ್ನು ಯೋಸೇಫನ
ವಶಕ್ಕೆ ಒಪ್ಪಿಸಿದನು. ಅಲ್ಲಿ ಮಾಡಬೇಕಾದ ದ್ದನ್ನೆಲ್ಲಾ
ಯೋಸೇಫನೇ ಮಾಡಿಸುತ್ತಿದ್ದನು. 23ಯೆಹೋವನು
ಯೋಸೇಫನ ಸಂಗಡವಿದ್ದು ಅವನ ಎಲ್ಲಾ ಕೆಲಸ ಕಾರ್ಯ
ಗಳನ್ನು ಯಶಸ್ವಿ ಗೊಳಿಸುತ್ತಿದ್ದದ್ದರಿಂದ ಮುಖ್ಯಾಧಿ
ಕಾರಿಯು ಎಲ್ಲಾ ವಿಷಯಗಳನ್ನು ಯೋಸೇಫನಿಗೆ ವಹಿಸಿ
ನಿಶ್ಚಿಂತೆಯಾಗಿದ್ದನು.

### ಯೋಸೇಫನು ಎರಡು ಕನಸುಗಳ ಅರ್ಥವನ್ನು ತಿಳಿಸಿದ್ದು

40 ತರುವಾಯ ಫರೋಹನ ಇಬ್ಬರು ಸೇವಕರು
ಫರೋಹನಿಗೆ ಯಾವುದೋ ತಪ್ಪುಮಾಡಿದರು.
ಈ ಇಬ್ಬರು ಸೇವಕ ರುಗಳಲ್ಲಿ ಒಬ್ಬನು ಭಕ್ಷ್ಯಗಾರ ಮತ್ತು
ಮತ್ತೊಬ್ಬನು ಪಾನದಾಯಕ. 2ಫರೋಹನು ತನ್ನ ಭಕ್ಷ್ಯ
ಗಾರನ ಮೇಲೆಯೂ ಪಾನದಾಯಕನ ಮೇಲೆಯೂ
ಕೋಪಗೊಂಡನು. 3ಆದ್ದರಿಂದ ಅವರನ್ನು ಯೋಸೇಫ
ನಿದ್ದ ಸೆರೆಮನೆಗೆ ಹಾಕಿಸಿದನು. ಪೋಟೀಫರನು
ಫರೋಹನನ ಕಾವಲುಗಾರರ ಅಧಿಕಾರಿಯಾಗಿದ್ದು ಈ
ಸೆರೆಮನೆಯ ಜವಾಬ್ದಾರಿಯನ್ನು ಹೊಂದಿದ್ದನು. 4ಸೆರೆ
ಮನೆಯ ಮುಖ್ಯಾಧಿಕಾರಿಯು ಈ ಇಬ್ಬರು ಕೈದಿಗಳನ್ನು
ಯೋಸೇಫನ ವಶಕ್ಕೆ ಒಪ್ಪಿಸಿದನು. ಸ್ವಲ್ಪಕಾಲದವರೆಗೆ ಆ
ಇಬ್ಬರು ಸೆರೆಮನೆಯೊಳಗೆ ಇದ್ದರು. 5ಒಂದು ರಾತ್ರಿ ಆ
ಇಬ್ಬರು ಕೈದಿಗಳಿಗೆ ಅಂದರೆ ಭಕ್ಷ್ಯಗಾರನಿಗೂ
ಪಾನದಾಯಕನಿಗೂ ಒಂದೊಂದು ಕನಸು ಬಿತ್ತು. ಮತ್ತು
ಅವರಿಬ್ಬರ ಕನಸುಗಳು ತಮ್ಮದೇ ಆದ ಅರ್ಥವನ್ನು
ಹೊಂದಿದ್ದವು. 6ಮರುದಿನ ಮುಂಜಾನೆ ಯೋಸೇಫನು
ಅವರ ಬಳಿಗೆ ಹೋದನು. ಅವರಿಬ್ಬರು ಚಿಂತೆಯಿಂದ
ಇರುವುದನ್ನು ಯೋಸೇಫನು ಕಂಡು, 7‘‘ಈ ದಿನ ನೀವು
ತುಂಬ ಚಿಂತೆಯಿಂದ ಇರುವಂತೆ ಕಾಣುತ್ತಿದೆ, ಕಾರಣ
ವೇನು?’’ ಎಂದು ಕೇಳಿದನು.

8ಆ ಇಬ್ಬರು, ‘‘ನಾವು ಕಳೆದ ರಾತ್ರಿ ಕನಸನ್ನು ಕಂಡೆವು;
ಆದರೆ ನಾವು ಕಂಡ ಕನಸು ನಮಗೆ ಅರ್ಥವಾಗುತ್ತಿಲ್ಲ.
ನಮಗೆ ಕನಸುಗಳ ಅರ್ಥವನ್ನು ತಿಳಿಸುವವರಾಗಲೀ ವಿವರಿ
ಸುವವರಾಗಲೀ ಯಾರೂ ಇಲ್ಲ’’ ಎಂದು ಹೇಳಿದರು.

ಯೋಸೇಫನು ಅವರಿಗೆ, ‘‘ದೇವರೊಬ್ಬನು ಮಾತ್ರ
ಕನಸುಗಳನ್ನು ಅರ್ಥಮಾಡಿಕೊಳ್ಳಬಲ್ಲನು ಮತ್ತು ಕನಸು
ಗಳ ಅರ್ಥವನ್ನು ಹೇಳಬಲ್ಲನು. ಆದ್ದರಿಂದ ದಯಮಾಡಿ
ನಿಮ್ಮ ಕನಸುಗಳನ್ನು ನನಗೆ ತಿಳಿಸಿರಿ’’ ಎಂದು ಹೇಳಿದನು.

### ದ್ರಾಕ್ಷಾರಸ ಕೊಡುವವನ ಕನಸು

9ಆಗ ಪಾನದಾಯಕನು ಯೋಸೇಫನಿಗೆ, ‘‘ನಾನು
ಕನಸಿನಲ್ಲಿ ದ್ರಾಕ್ಷಾಲತೆಯನ್ನು ಕಂಡೆನು. 10ಆ ದ್ರಾಕ್ಷಾ
ಲತೆಯ ಮೇಲೆ ಮೂರು ಕವಲುಗಳಿದ್ದವು. ಆ ಕವಲು
ಗಳು ಹೂವುಗಳನ್ನು ಬಿಟ್ಟವು; ಆ ಹೂವುಗಳು ಹಣ್ಣುಗ
ಳಾದವು. 11ನಾನು ಫರೋಹನ ಲೋಟವನ್ನು ಹಿಡಿದು
ಕೊಂಡಿದ್ದರಿಂದ ದ್ರಾಕ್ಷಿಹಣ್ಣುಗಳನ್ನು ತೆಗೆದುಕೊಂಡು
ಲೋಟದೊಳಗೆ ರಸ ಹಿಂಡಿ ಲೋಟವನ್ನು ಫರೋಹನಿಗೆ
ಕೊಟ್ಟೆನು’’ ಎಂದು ಹೇಳಿದನು.

12ಅದಕ್ಕೆ ಯೋಸೇಫನು, ‘‘ನಾನು ಕನಸಿನ ಅರ್ಥವನ್ನು
ನಿನಗೆ ತಿಳಿಸುವೆನು. ಆ ಮೂರು ಕವಲುಗಳು ಎಂದರೆ
ಮೂರು ದಿನಗಳು. 13ಮೂರುದಿನಗಳೊಳಗಾಗಿ
ಫರೋಹನು ನಿನ್ನನ್ನು ಕ್ಷಮಿಸಿ ಮತ್ತೆ ಕೆಲಸಕ್ಕೆ ಸೇರಿಸಿ
ಕೊಳ್ಳುವನು. ನೀನು ಮೊದಲಿನಂತೆ ಅವನಿಗೆ ಪಾನದಾಯ
ಕನಾಗಿರುವೆ. 14ಆದರೆ ನೀನು ಸುಖದಿಂದಿರುವಾಗ
ನನ್ನನ್ನು ನೆನಸಿಕೊಂಡು ನನ್ನ ವಿಷಯವಾಗಿ ಫರೋಹನಿಗೆ
ತಿಳಿಸಿ ನನಗೆ ಸೆರೆಮನೆಯಿಂದ ಬಿಡುಗಡೆಯಾಗುವಂತೆ
ಮಾಡು. 15ಇಬ್ರಿಯರ ದೇಶದವನಾದ ನನ್ನನ್ನು ಕೆಲವರು
ಅಪಹರಿಸಿಕೊಂಡು ಬಂದರು. ಆದರೆ ಇಲ್ಲಿಯೂ ನಾನು
ಯಾವ ತಪ್ಪನ್ನೂ ಮಾಡಲಿಲ್ಲ. ಆದ್ದರಿಂದ ನಾನು ಸೆರೆ
ಮನೆಯಲ್ಲಿರಬಾರದು’’ ಎಂದು ಹೇಳಿದನು.

### ಭಕ್ಷ್ಯಗಾರನ ಕನಸು

16ಪಾನದಾಯಕನ ಕನಸಿನ ಅರ್ಥವು ಒಳ್ಳೆಯದಾಗಿರು
ವುದನ್ನು ಕಂಡ ಭಕ್ಷ್ಯಗಾರನು ಯೋಸೇಫನಿಗೆ, ‘‘ನನಗೂ

ಒಂದು ಕನಸಾಯಿತು. ನನ್ನ ಕನಸಿನಲ್ಲಿ ನನ್ನ ತಲೆಯ
ಮೇಲೆ ಮೂರು ಬುಟ್ಟಿಗಳಿದ್ದವು. 17ಅವುಗಳಲ್ಲಿ ರಾಜನಿ
ಗೋಸ್ಕರವಾಗಿ ಎಲ್ಲಾ ಬಗೆಯ ಭಕ್ಷ್ಯಗಳಿದ್ದವು. ಆದರೆ
ಪಕ್ಷಿಗಳು ಆ ಆಹಾರವನ್ನು ತಿನ್ನುತ್ತಿದ್ದವು'' ಎಂದು
ಹೇಳಿದನು.

18ಯೋಸೇಫನು, ''ಕನಸಿನ ಅರ್ಥವನ್ನು ನಾನು ನಿನಗೆ
ತಿಳಿಸುತ್ತೇನೆ. ಮೂರು ಬುಟ್ಟಿಗಳ ಅರ್ಥ ಮೂರು ದಿನ
ಗಳು. 19ಮೂರುದಿನಗಳೊಳಗಾಗಿ ರಾಜನು ನಿನ್ನನ್ನು ಸೆರೆ
ಮನೆಯಿಂದ ಬಿಡಿಸಿ ನಿನ್ನ ಶಿರಚ್ಛೇದನ ಮಾಡಿಸುವನು;
ನಿನ್ನ ದೇಹವನ್ನು ಕಂಬಕ್ಕೆ ನೇತುಹಾಕಿಸುವನು; ಪಕ್ಷಿಗಳು
ನಿನ್ನ ದೇಹವನ್ನು ತಿಂದುಬಿಡುತ್ತವೆ'' ಎಂದು ಹೇಳಿದನು.

### ಯೋಸೇಫನನ್ನು ಮರೆತನು

20ಮೂರನೆಯ ದಿನ ಬಂದಿತು. ಅದು ಫರೋಹನ
ಜನ್ಮದಿನವಾಗಿತ್ತು. ಫರೋಹನು ತನ್ನ ಎಲ್ಲಾ ಸೇವಕರಿಗೆ
ಔತಣಕೂಟವನ್ನು ಏರ್ಪಡಿಸಿದನು. ಔತಣಕೂಟದಲ್ಲಿ
ಫರೋಹನು ಭಕ್ಷ್ಯಗಾರನನ್ನೂ ಮತ್ತು ಪಾನದಾಯಕ
ನನ್ನೂ ಸೆರೆಮನೆಯಿಂದ ಬಿಡುಗಡೆ ಮಾಡಿದನು.
21ಫರೋಹನು ಪಾನದಾಯಕನನ್ನು ಮತ್ತೆ ಅದೇ ಕೆಲಸಕ್ಕೆ
ನೇಮಿಸಿದನು; ಅವನು ಪಾನಪಾತ್ರೆಯನ್ನು ಫರೋಹನ
ಕೈಗೆ ಕೊಡುವವನಾದನು. 22ಆದರೆ ಫರೋಹನು ಭಕ್ಷ್ಯ
ಗಾರನನ್ನು ಕೊಲ್ಲಿಸಿದನು. ಯೋಸೇಫನು ಹೇಳಿ
ದಂತೆಯೇ ಪ್ರತಿಯೊಂದು ನಡೆಯಿತು. 23ಆದರೆ ಪಾನ
ದಾಯಕನು ಯೋಸೇಫನಿಗೆ ಸಹಾಯ ಮಾಡ
ಬೇಕೆಂಬುದನ್ನು ಮರೆತುಬಿಟ್ಟು ಯೋಸೇಫನ ಬಗ್ಗೆ
ಫರೋಹನಿಗೆ ಏನೂ ತಿಳಿಸಲಿಲ್ಲ.

### ಫರೋಹನ ಕನಸುಗಳು

41 ಎರಡು ವರ್ಷಗಳ ನಂತರ ಫರೋಹನಿಗೆ
ಒಂದು ಕನಸಾಯಿತು. ಫರೋಹನು ಕನಸಿನಲ್ಲಿ
ನೈಲ್ ನದಿಯ ತೀರದಲ್ಲಿ ನಿಂತಿದ್ದನು. 2ಆಗ ಕೊಬ್ಬಿದ
ಮತ್ತು ಲಕ್ಷಣವಾಗಿದ್ದ ಏಳು ಹಸುಗಳು ನದಿಯೊಳಗಿಂದ
ಬಂದು ಹುಲ್ಲನ್ನು ಮೇಯುತ್ತಿದ್ದವು. 3ಬಳಿಕ ಬಡಕ
ಲಾಗಿದ್ದ ಮತ್ತು ಕುರೂಪವಾಗಿದ್ದ ಏಳು ಹಸುಗಳು ನದಿ
ಯೊಳಗಿಂದ ಬಂದು ಲಕ್ಷಣವಾಗಿದ್ದ ಏಳು ಹಸುಗಳ ಪಕ್ಕ
ದಲ್ಲಿ ನಿಂತುಕೊಂಡವು. 4ಕುರೂಪವಾಗಿದ್ದ ಏಳು ಹಸು
ಗಳು ಲಕ್ಷಣವಾಗಿದ್ದ ಏಳು ಹಸುಗಳನ್ನು ತಿಂದುಬಿಟ್ಟವು.
ಆಗ ಫರೋಹನಿಗೆ ಎಚ್ಚರವಾಯಿತು.

5ಫರೋಹನು ಮತ್ತೆ ಮಲಗಿಕೊಂಡನು. ಅವನಿಗೆ
ಎರಡನೆಯ ಕನಸಾಯಿತು. ಪುಷ್ಟಿಯುಳ್ಳ ಏಳು ತೆನೆಗಳು
ಒಂದೇ ಗಿಡದಲ್ಲಿ ಹುಟ್ಟಿದವು. 6ಆಮೇಲೆ ಅದೇ ಸಸಿಯ
ಮೇಲೆ ಬಿಸಿಗಾಳಿಯಿಂದ ಬತ್ತಿಹೋಗಿದ್ದ ಏಳು ತೆನೆಗಳು
ಹುಟ್ಟಿದವು. 7ಬತ್ತಿಹೋಗಿದ್ದ ತೆನೆಗಳು ಪುಷ್ಟಿಯಾಗಿದ್ದ ತೆನೆ
ಗಳನ್ನು ತಿಂದುಬಿಟ್ಟವು. ಫರೋಹನು ಎಚ್ಚರಗೊಂಡಾಗ
ಅದು ಕೇವಲ ಕನಸೆಂದು ತಿಳಿದುಕೊಂಡನು. 8ಮರುದಿನ
ಮುಂಜಾನೆ ಈ ಕನಸುಗಳ ಬಗ್ಗೆ ತುಂಬ ಚಿಂತೆಗೊಳಗಾಗಿ
ಈಜಿಪ್ಟಿನಲ್ಲಿದ್ದ ಎಲ್ಲಾ ಮಂತ್ರಗಾರರನ್ನೂ ಎಲ್ಲಾ
ವಿದ್ವಾಂಸರನ್ನೂ ಕರೆಯಿಸಿ ಕನಸುಗಳನ್ನು ತಿಳಿಸಿದನು.
ಆದರೆ ಅವರಲ್ಲಿ ಯಾರಿಗೂ ಕನಸುಗಳ ಅರ್ಥವನ್ನು
ತಿಳಿಸುವುದಕ್ಕಾಗಲೀ ವಿವರಿಸುವುದಕ್ಕಾಗಲೀ ಆಗಲಿಲ್ಲ.

### ಪಾನದಾಯಕನು ಫರೋಹನಿಗೆ ಯೋಸೇಫನ ಬಗ್ಗೆ ತಿಳಿಸಿದ್ದು

9ಆಗ ಪಾನದಾಯಕನು ಯೋಸೇಫನನ್ನು ಜ್ಞಾಪಿಸಿ
ಕೊಂಡು ಫರೋಹನಿಗೆ, ''ನನಗೆ ಸಂಭವಿಸಿದ್ದು ನನ್ನ ನೆನ
ಪಿಗೆ ಬರುತ್ತಿದೆ. 10ನೀವು ನನ್ನ ಮೇಲೆ ಮತ್ತು ಭಕ್ಷ್ಯಗಾರನ
ಮೇಲೆ ಕೋಪಗೊಂಡು ನಮ್ಮನ್ನು ಸೆರೆಮನೆಗೆ ಹಾಕಿಸಿ
ದಿರಿ. 11ಒಂದು ರಾತ್ರಿ ನಮ್ಮಿಬ್ಬರಿಗೂ ಕನಸಾಯಿತು. ಆ
ಕನಸುಗಳಿಗೆ ಬೇರೆಬೇರೆಯ ಅರ್ಥಗಳಿದ್ದವು. 12ನಮ್ಮ
ಜೊತೆಯಲ್ಲಿ ಒಬ್ಬ ಇಬ್ರಿಯ ಯುವಕನಿದ್ದನು. ಅವನು
ಕಾವಲುಗಾರರ ಅಧಿಕಾರಿಯ ಸೇವಕನಾಗಿದ್ದನು. ನಾವು
ಅವನಿಗೆ ನಮ್ಮ ಕನಸುಗಳನ್ನು ತಿಳಿಸಿದೆವು. ಅವನು ನಮಗೆ
ಅವುಗಳನ್ನು ವಿವರಿಸಿ ನಮ್ಮ ಕನಸಿನ ಅರ್ಥವನ್ನು ತಿಳಿಸಿ
ದನು. 13ಅವನು ಹೇಳಿದ ಅರ್ಥಕ್ಕೆ ಸರಿಯಾಗಿ ನನಗೆ
ಆಯಿತು; ಮೊದಲಿನ ಉದ್ಯೋಗವು ದೊರೆಯಿತು;
ಅವನು ಭಕ್ಷ್ಯಗಾರನನ್ನು ಕುರಿತು ತಿಳಿಸಿದಂತೆಯೇ ಅವ
ನಿಗೆ ಮರಣದಂಡನೆ ಆಯಿತು'' ಎಂದು ಹೇಳಿದನು.

### ಕನಸುಗಳ ಅರ್ಥವನ್ನು ತಿಳಿಸಲು ಯೋಸೇಫನನ್ನು ಕರೆಸಿದ್ದು

14ಆಗ ಫರೋಹನು ಯೋಸೇಫನನ್ನು ಸೆರೆಮನೆ
ಯಿಂದ ಕರೆಸಿದನು. ಯೋಸೇಫನು ಕ್ಷೌರಮಾಡಿ
ಕೊಂಡು ಶುದ್ಧವಾದ ಬಟ್ಟೆಗಳನ್ನು ಹಾಕಿಕೊಂಡು ಹೋಗಿ
ಫರೋಹನ ಮುಂದೆ ನಿಂತುಕೊಂಡನು. 15ಫರೋಹನು
ಯೋಸೇಫನಿಗೆ, ''ನನಗೆ ಒಂದು ಕನಸಾಯಿತು. ಆದರೆ
ಅದರ ಅರ್ಥವನ್ನು ತಿಳಿಸಬಲ್ಲವರು ಇಲ್ಲಿ ಯಾರೂ ಇಲ್ಲ.
ನೀನು ಕನಸುಗಳ ಅರ್ಥವನ್ನು ಹೇಳಬಲ್ಲೆ ಎಂಬುದಾಗಿ
ನಿನ್ನ ಬಗ್ಗೆ ಕೇಳಿದೆ'' ಎಂದು ಹೇಳಿದನು.

16ಯೋಸೇಫನು, ''ಕನಸುಗಳನ್ನು ಅರ್ಥಮಾಡಿ
ಕೊಳ್ಳುವ ಸಾಮರ್ಥ್ಯ ನನ್ನಲ್ಲಿಲ್ಲ. ಆ ಶಕ್ತಿಯನ್ನು ಹೊಂದಿ
ರುವವನು ದೇವರೊಬ್ಬನೇ. ಆದರೆ ದೇವರು ಫರೋಹನಿ
ಗೋಸ್ಕರ ಅರ್ಥವನ್ನು ತಿಳಿಸುವನು'' ಎಂದು ಹೇಳಿದನು.

17ಆಗ ಫರೋಹನು ಯೋಸೇಫನಿಗೆ, ''ನನ್ನ ಕನಸಿ
ನಲ್ಲಿ, ನಾನು ನೈಲ್ ನದಿಯ ತೀರದಲ್ಲಿ ನಿಂತು

ಕೊಂಡಿದ್ದೆನು. 18ಕೊಬ್ಬಿದ ಮತ್ತು ಲಕ್ಷಣವಾಗಿದ್ದ ಏಳು
ಹಸುಗಳು ನದಿಯೊಳಗಿಂದ ಬಂದು ಹುಲ್ಲನ್ನು ಮೇಯು
ತ್ತಿದ್ದವು. 19ಆಗ ಬಡಕಲಾಗಿದ್ದ ಮತ್ತು ಕುರೂಪವಾಗಿದ್ದ
ಏಳು ಹಸುಗಳು ನದಿಯೊಳಗಿಂದ ಬಂದು ನಿಂತು
ಕೊಂಡವು. ಅಂಥಾ ಬಡಕಲು ಹಸುಗಳನ್ನು ನಾನು
ಈಜಿಪ್ಟಿನಲ್ಲಿ ಎಂದೂ ನೋಡಿಲ್ಲ. 20ಬಡಕಲಾಗಿದ್ದ ಆ
ಹಸುಗಳು ಮೊದಲು ಬಂದ ಲಕ್ಷಣವಾದ ಏಳು ಹಸು
ಗಳನ್ನು ತಿಂದುಬಿಟ್ಟವು. 21ಅವು ಏಳು ಹಸುಗಳನ್ನು ತಿಂದ
ಮೇಲೆಯೂ ತಿಂದಂತೆ ಕಾಣುತ್ತಿರಲಿಲ್ಲ; ಅವು ಮೊದಲಿ
ನಂತೆಯೇ ಬಡಕಲಾಗಿದ್ದವು ಮತ್ತು ಕುರೂಪವಾಗಿದ್ದವು.
ಆಗ ನನಗೆ ಎಚ್ಚರವಾಯಿತು.

22‘‘ನನಗಾದ ಎರಡನೆಯ ಕನಸು ಇಂತಿದೆ: ಒಂದೇ
ಗಿಡದಲ್ಲಿ ಪುಷ್ಟಿಯಾದ ಏಳು ತೆನೆಗಳು ಹುಟ್ಟಿದವು.
23ಬಳಿಕ ಅದೇ ಗಿಡದಲ್ಲಿ ಮೇಲೆ ಬಿಸಿಗಾಳಿಯಿಂದ ಬತ್ತಿ
ಹೋಗಿದ್ದ ಏಳು ತೆನೆಗಳು ಹುಟ್ಟಿದವು. 24ಬತ್ತಿಹೋಗಿದ್ದ
ತೆನೆಗಳು ಪುಷ್ಟಿಯಾಗಿದ್ದ ಏಳು ತೆನೆಗಳನ್ನು ತಿಂದುಬಿಟ್ಟವು.

‘‘ನಾನು ಈ ಕನಸುಗಳನ್ನು ಮಂತ್ರಗಾರರಿಗೂ
ವಿದ್ವಾಂಸರಿಗೂ ತಿಳಿಸಿದೆನು. ಆದರೆ ಅವರಲ್ಲಿ ಯಾರೂ
ನನಗೆ ಈ ಕನಸುಗಳ ಅರ್ಥವನ್ನು ವಿವರಿಸಲಾಗಲಿಲ್ಲ.
ಅವುಗಳ ಅರ್ಥವೇನು?’’ ಎಂದು ಕೇಳಿದನು.

### ಯೋಸೇಫನಿಂದ ಕನಸುಗಳ ಅರ್ಥ ವಿವರಣೆ

25ಆಗ ಯೋಸೇಫನು ಫರೋಹನಿಗೆ, ‘‘ಆ ಎರಡು
ಕನಸುಗಳ ಅರ್ಥವು ಒಂದೇ. ಮುಂದೆ ನಡೆಯಲಿರು
ವುದನ್ನು ದೇವರು ತಮಗೆ ತಿಳಿಸಿದ್ದಾನೆ. 26ಒಳ್ಳೆಯ ಏಳು
ಹಸುಗಳೇ ಏಳು ವರ್ಷಗಳು. ಒಳ್ಳೆಯ ಏಳು ತೆನೆಗಳೇ ಏಳು
ವರ್ಷಗಳು. ಎರಡು ಕನಸುಗಳೂ ಒಂದೇ ಅರ್ಥವನ್ನು
ಹೊಂದಿವೆ. 27ಬಡಕಲಾದ ಮತ್ತು ಕುರೂಪವಾದ ಏಳು
ಹಸುಗಳು ಮತ್ತು ಕೆಟ್ಟುಹೋದ ಕಾಳಿನ ಏಳು ತೆನೆಗಳು,
ದೇಶಕ್ಕೆ ಬರುವ ಏಳು ವರ್ಷಗಳ ಬರಗಾಲವನ್ನು ಸೂಚಿಸು
ತ್ತವೆ. ಈ ಏಳು ವರ್ಷಗಳು ಒಳ್ಳೆಯ ವರ್ಷಗಳ ನಂತರ
ಬರುತ್ತವೆ. 28ಮುಂದೆ ನಡೆಯಲಿರುವುದನ್ನು ದೇವರು
ನಿಮಗೆ ತಿಳಿಸಿದ್ದಾನೆ. ನಾನು ಹೇಳಿದಂತೆಯೇ ಸಂಭವಿಸು
ವುದು. 29ನಿಮಗೆ ಏಳು ವರ್ಷಗಳ ಕಾಲ ಒಳ್ಳೆಯ ಬೆಳೆ
ಯಾಗುವುದು; ಈಜಿಪ್ಟ್ ದೇಶದಲ್ಲೆಲ್ಲಾ ಊಟಕ್ಕೆ
ಬೇಕಾದಷ್ಟು ಆಹಾರವಿರುವುದು. 30ಆದರೆ ಆ ಏಳು
ವರ್ಷಗಳಾದ ಮೇಲೆ ದೇಶದಲ್ಲೆಲ್ಲಾ ಏಳು ವರ್ಷಗಳ
ವರೆಗೆ ಬರಗಾಲವಿರುವುದು. ಆಗ ಈಜಿಪ್ಟಿನ ಜನರು
ತಾವು ಮೊದಲು ಬೆಳೆದ ಆಹಾರವನ್ನೆಲ್ಲಾ ಮರೆತುಬಿಡು
ವರು. ಈ ಕ್ಷಾಮವು ದೇಶವನ್ನು ನಾಶಮಾಡುವುದು.
31ಮೊದಲಿನ ಸಮೃದ್ಧಿಯ ಗುರುತೇ ಜನರಿಗೆ
ಕಾಣಸಿಗದು.

32‘‘ಫರೋಹನೇ, ಒಂದೇ ವಿಷಯದ ಮೇಲೆ ಎರಡು
ಕನಸುಗಳಾಗಿರುವುದರಿಂದ ದೇವರು ಇದನ್ನು ನಿಶ್ಚಯ
ವಾಗಿಯೂ ಬೇಗನೆ ಬರಮಾಡಲಿದ್ದಾನೆ. 33ಆದ್ದರಿಂದ
ತಾವು ತುಂಬ ಬುದ್ಧಿವಂತನೂ ವಿವೇಕಿಯೂ ಆಗಿರುವ
ಒಬ್ಬನನ್ನು ಆರಿಸಿಕೊಂಡು ಅವನನ್ನು ಈಜಿಪ್ಟ್ ದೇಶದ
ಮೇಲೆ ಆಡಳಿತಾಧಿಕಾರಿಯನ್ನಾಗಿ ನೇಮಿಸಬೇಕು.
34ಅಲ್ಲದೆ ತಾವು ಜನರಿಂದ ಆಹಾರವನ್ನು ಶೇಖರಿಸುವುದ
ಕ್ಕಾಗಿ ತಾವು ಸಂಗ್ರಹಕರನ್ನು ನೇಮಿಸಿ ಒಳ್ಳೆಯ ಏಳು ವರ್ಷ
ಗಳಲ್ಲಿ ಪ್ರತಿಯೊಬ್ಬ ಬೆಳೆಗಾರನಿಂದಲೂ ಬೆಳೆಯ ಐದನೆ
ಒಂದು ಭಾಗವನ್ನು ಕಂದಾಯ ರೂಪದಲ್ಲಿ ವಸೂಲಿ
ಮಾಡಬೇಕು. 35ಸಂಗ್ರಹಕಾರರ ಮೂಲಕ ಆಹಾರ
ಪದಾರ್ಥಗಳನ್ನೂ ದವಸಧಾನ್ಯಗಳನ್ನೂ ಶೇಖರಿಸಿ ನಿಮ್ಮ
ಉಗ್ರಾಣಗಳಲ್ಲಿಟ್ಟು ನೋಡಿಕೊಳ್ಳಲಿ. 36ಉಗ್ರಾಣಗಳಲ್ಲಿ
ಸಾಕಷ್ಟು ಆಹಾರವಿರುವುದರಿಂದ ಈಜಿಪ್ಟಿನವರು ಬರಗಾ
ಲದ ಏಳುವರ್ಷಗಳಲ್ಲಿ ಆಹಾರವಿಲ್ಲದೆ ಸಾಯುವುದಿಲ್ಲ’’
ಎಂದು ಹೇಳಿದನು.

37ಇದು ಫರೋಹನಿಗೂ ಅವನ ಎಲ್ಲಾ ಸೇವಕರಿಗೂ
ಒಳ್ಳೆಯದಾಗಿ ಕಂಡುಬಂತು. 38ಫರೋಹನು ತನ್ನ
ಸೇವಕರಿಗೆ, ‘‘ಈ ಜವಾಬ್ದಾರಿಯನ್ನು ವಹಿಸಿಕೊಳ್ಳಲು
ಯೋಸೇಫನಿಗಿಂತಲೂ ಉತ್ತಮನಾದ ವ್ಯಕ್ತಿಯನ್ನು
ಕಂಡುಕೊಳ್ಳಲು ಸಾಧ್ಯವೇ? ದೇವರಾತ್ಮನೇ ಇವನ
ಸಂಗಡವಿದ್ದಾನೆ’’ ಎಂದು ಹೇಳಿದನು.

39ಫರೋಹನು ಯೋಸೇಫನಿಗೆ, ‘‘ದೇವರು ನಿನಗೆ ಈ
ಎಲ್ಲಾ ವಿಷಯಗಳನ್ನು ತೋರಿಸಿರುವುದರಿಂದ ನಿನಗಿಂತ
ಬುದ್ಧಿವಂತನೂ ವಿವೇಕಿಯೂ ಇಲ್ಲವೇ ಇಲ್ಲ. 40ಆದ್ದ
ರಿಂದ ನಾನು ನಿನ್ನನ್ನು ದೇಶದ ರಾಜ್ಯಪಾಲನನ್ನಾಗಿ
ನೇಮಿಸುವೆನು; ಜನರು ನಿನ್ನ ಆಜ್ಞೆಗಳಿಗೆಲ್ಲಾ ವಿಧೇಯ
ರಾಗುವರು. ಈ ದೇಶದಲ್ಲಿ ನಿನಗೆ ಅಧಿಪತಿಯಾಗಿರು
ವವನು ನಾನೊಬ್ಬನೇ’’ ಎಂದು ಹೇಳಿದನು.

41ಫರೋಹನು ಯೋಸೇಫನಿಗೆ, ‘‘ನಾನು ನಿನ್ನನ್ನು
ಈಜಿಪ್ಟ್ ದೇಶಕ್ಕೆಲ್ಲ ರಾಜ್ಯಪಾಲನನ್ನಾಗಿ ನೇಮಿಸುವೆನು’’
ಎಂದು ಹೇಳಿ 42ರಾಜಮುದ್ರೆಯನ್ನು ಹೊಂದಿದ್ದ ತನ್ನ
ಉಂಗುರವನ್ನು ಕೊಟ್ಟನು; ಧರಿಸಿಕೊಳ್ಳಲು ಒಳ್ಳೆಯ
ನಾರುಬಟ್ಟೆಯ ನಿಲುವಂಗಿಯನ್ನು ಕೊಟ್ಟನು; ಕೊರಳಿಗೆ
ಚಿನ್ನದ ಸರವನ್ನು ಹಾಕಿದನು. 43ಫರೋಹನು ಯೋಸೇಫ
ನಿಗೆ ಎರಡನೆಯ ರಾಜರಥವನ್ನು ಸಂಚಾರಕ್ಕಾಗಿ
ಕೊಟ್ಟನು. ವಿಶೇಷ ಕಾವಲುಗಾರರು ಅವನ ರಥದ
ಮುಂದೆ ನಡೆದುಹೋಗುತ್ತಾ ‘‘ಪ್ರಜೆಗಳೇ, ಯೋಸೇಫ
ನಿಗೆ ತಲೆಬಾಗಿ ನಮಸ್ಕರಿಸಿರಿ’’ ಎಂದು ಪ್ರಕಟಿಸಿದರು.

ಹೀಗೆ ಯೋಸೇಫನು ಈಜಿಪ್ಟಿಗೆಲ್ಲಾ ರಾಜ್ಯಪಾಲ
ನಾದನು. 44ಫರೋಹನು ಅವನಿಗೆ, ‘‘ನಾನು ರಾಜ
ಫರೋಹ. ಆದ್ದರಿಂದ ನನಗೆ ಇಷ್ಟವಾದದ್ದನ್ನು

ಮಾಡುವೆನು. ಆದರೆ ನಿನ್ನ ಅಪ್ಪಣೆಯಿಲ್ಲದೆ ಈಜಿಪ್ಟಿನ
ಬೇರೆ ಯಾರೂ ಕೈಯೆತ್ತಲೂ ಸಾಧ್ಯವಿಲ್ಲ, ಕಾಲನ್ನು
ಚಲಿಸಲೂ ಸಾಧ್ಯವಿಲ್ಲ'' ಎಂದು ಹೇಳಿದನು.
45ಫರೋಹನು ಯೋಸೇಫನಿಗೆ, ಸಾಫ್ನತ್ಪನ್ನೇಹ*
ಎಂಬ ಹೆಸರನ್ನು ಕೊಟ್ಟನು. ಇದಲ್ಲದೆ ಫರೋಹನು
ಯೋಸೇಫನಿಗೆ ಅಸನತ್ ಎಂಬಾಕೆಯನ್ನು ಮದುವೆ
ಮಾಡಿಸಿದನು. ಆಕೆ ಓನ್ ನಗರದ ಆಚಾರ್ಯನಾಗಿದ್ದ
ಫೋಟೀಫರನ ಮಗಳು. ಹೀಗೆ ಯೋಸೇಫನು ಈಜಿಪ್ಟ್
ದೇಶಕ್ಕೆಲ್ಲಾ ರಾಜ್ಯಪಾಲನಾದನು.
46ಯೋಸೇಫನು ಈಜಿಪ್ಟ್ ರಾಜನ ಸೇವೆಯನ್ನು
ಪ್ರಾರಂಭಿಸಿದಾಗ ಮೂವತ್ತು ವರ್ಷದವನಾಗಿದ್ದನು.
ಯೋಸೇಫನು ಈಜಿಪ್ಟ್ ದೇಶದಲ್ಲೆಲ್ಲಾ ಸಂಚರಿಸಿದನು.
47ಏಳು ಒಳ್ಳೆಯ ವರ್ಷಗಳಲ್ಲಿ ದೇಶದಲ್ಲಿ ಬೆಳೆಯು
ಚೆನ್ನಾಗಿ ಬೆಳೆಯಿತು. 48ಈಜಿಪ್ಟಿನಲ್ಲಿ ಯೋಸೇಫನು ಆ
ಏಳು ವರ್ಷಗಳ ಕಾಲದಲ್ಲಿ ಆಹಾರವನ್ನು ಸಂಗ್ರಹಿಸಿ ನಗರ
ಗಳ ಉಗ್ರಾಣಗಳಲ್ಲಿಟ್ಟನು. ಪ್ರತಿಯೊಂದು ನಗರದ
ಸುತ್ತುಮುತ್ತಲಿನ ಹೊಲಗಳಲ್ಲಿ ಬೆಳೆದ ದವಸಧಾನ್ಯವನ್ನು
ಆಯಾ ನಗರಗಳಲ್ಲಿ ಕೂಡಿಸಿಟ್ಟನು. 49ಯೋಸೇಫನು
ಬಹಳ ದವಸಧಾನ್ಯಗಳನ್ನು ಸಂಗ್ರಹಿಸಿದ್ದರಿಂದ ಸಮು
ದ್ರದ ಮರಳಿನ ರಾಶಿಯೆಂಬಂತೆ ತೋರಿತು; ಲೆಕ್ಕಿಸು
ವುದಕ್ಕೂ ಅಸಾಧ್ಯವಾಯಿತು.
50ಯೋಸೇಫನ ಹೆಂಡತಿ ಅಸನತ್. ಆಕೆ ಓನ್ ನಗರ
ದಲ್ಲಿ ಆಚಾರ್ಯನಾಗಿದ್ದ ಫೋಟೀಫರನ ಮಗಳು. ಬರ
ಗಾಲದ ಮೊದಲನೆಯ ವರ್ಷ ಬರುವುದಕ್ಕಿಂತ ಮೊದಲೇ
ಯೋಸೇಫನಿಗೆ ಅಸನತಳಲ್ಲಿ ಇಬ್ಬರು ಗಂಡು ಮಕ್ಕಳು
ಹುಟ್ಟಿದರು. 51ಮೊದಲನೆಯ ಮಗನು ಹುಟ್ಟಿದಾಗ,
''ನನ್ನ ಎಲ್ಲಾ ಕಷ್ಟಗಳನ್ನೂ ನನ್ನ ತಂದೆಯ ಮನೆಯ
ವರನ್ನೂ ಮರೆತು ಬಿಡುವಂತೆ ದೇವರು ನನಗೆ ಸಹಾಯ
ಮಾಡಿದನು'' ಎಂದು ಹೇಳಿ ಯೋಸೇಫನು ಆ ಮಗು
ವಿಗೆ, ''ಮನಸ್ಸೆ' ಎಂದು ಹೆಸರಿಟ್ಟನು. 52ಎರಡನೆ ಮಗನು
ಹುಟ್ಟಿದಾಗ, ''ನನಗೆ ಕಷ್ಟ ಬಂದ ದೇಶದಲ್ಲೇ ದೇವರು
ನನ್ನನ್ನು ಅಭಿವೃದ್ಧಿಪಡಿಸಿದನು'' ಎಂದು ಹೇಳಿ, ಆ
ಮಗುವಿಗೆ, 'ಎಫ್ರಾಯಿಮ್' ಎಂದು ಹೆಸರಿಟ್ಟನು.

## ಬರಗಾಲದ ಪ್ರಾರಂಭ

53ಈಜಿಪ್ಟಿನಲ್ಲಿ ಸಮೃದ್ಧಿಕರವಾದ ಏಳು ವರ್ಷಗಳು
ಮುಗಿದ ಮೇಲೆ 54ಯೋಸೇಫನು ಹೇಳಿದ್ದಂತೆಯೇ
ಕ್ಷಾಮದ ಏಳು ವರ್ಷಗಳು ಆರಂಭಗೊಂಡವು. ಕ್ಷಾಮವು
ಸುತ್ತುಮುತ್ತಲಿನ ಪ್ರದೇಶಗಳಿಗೆಲ್ಲಾ ಹಬ್ಬಿಕೊಂಡಿತು.
ಈಜಿಪ್ಟಿನಲ್ಲಿ ಮಾತ್ರ ಆಹಾರ ದೊರಕುತ್ತಿತ್ತು. 55ಬರ
ಗಾಲವು ಪ್ರಾರಂಭವಾದಾಗ ಜನರು ಆಹಾರಕ್ಕಾಗಿ
ಫರೋಹನನ್ನು ಬೇಡಿಕೊಂಡರು. ಫರೋಹನು ಈಜಿ
ಪ್ಟಿನ ಜನರಿಗೆ, ''ಯೋಸೇಫನನ್ನು ಕೇಳಿರಿ; ಅವನು ಹೇಳಿ
ದಂತೆ ಮಾಡಿರಿ'' ಎಂದು ಹೇಳಿದನು.
56ಎಲ್ಲೆಲ್ಲಿಯೂ ಬರಗಾಲವಾದಾಗ, ಯೋಸೇಫನು
ಉಗ್ರಾಣಗಳನ್ನು ತೆಗೆಸಿ ದವಸಧಾನ್ಯಗಳನ್ನು ಜನರಿಗೆ
ಮಾರಾಟ ಮಾಡಿಸಿದನು. ಈಜಿಪ್ಟಿನಲ್ಲಿ ಬರವು ಭೀಕರ
ವಾಗಿತ್ತು. 57ಭೂಲೋಕದಲ್ಲೆಲ್ಲಾ ಕ್ಷಾಮವು ಭಯಂಕರ
ವಾಗಿದ್ದುದರಿಂದ ಎಲ್ಲಾ ದೇಶಗಳವರು ಯೋಸೇಫನಿಂದ
ಆಹಾರವನ್ನು ಪಡೆದುಕೊಳ್ಳುವುದಕ್ಕಾಗಿ ಈಜಿಪ್ಟಿಗೆ
ಬಂದರು.

## ಕನಸುಗಳು ನಿಜವಾದವು

42 ಈಜಿಪ್ಟಿನಲ್ಲಿ ದವಸಧಾನ್ಯಗಳಿರುವುದಾಗಿ
ಕಾನಾನಿನಲ್ಲಿದ್ದ ಯಾಕೋಬನಿಗೆ ತಿಳಿಯಿತು.
ಆದ್ದರಿಂದ ಯಾಕೋಬನು ತನ್ನ ಗಂಡು ಮಕ್ಕಳಿಗೆ,
''ನಾವು ಇಲ್ಲಿ ಏನೂ ಮಾಡದೆ ಕುಳಿತುಕೊಂಡಿರುವು
ದೇಕೆ? 2ಈಜಿಪ್ಟಿನಲ್ಲಿ ದವಸಧಾನ್ಯಗಳಿರುವುದಾಗಿ ನಾನು
ಕೇಳಿದ್ದೇನೆ. ಆದ್ದರಿಂದ ನಾವು ಅಲ್ಲಿಗೆ ಹೋಗಿ ನಮ್ಮ
ಆಹಾರವನ್ನು ಕೊಂಡುಕೊಳ್ಳೋಣ. ಆಗ ನಾವು ಸಾಯದೆ
ಬದುಕಿಕೊಳ್ಳುವೆವು'' ಎಂದು ಹೇಳಿದನು.
3ಆದ್ದರಿಂದ ಯೋಸೇಫನ ಹತ್ತು ಮಂದಿ ಸಹೋದ
ರರು ದವಸಧಾನ್ಯಗಳನ್ನು ಕೊಂಡುಕೊಳ್ಳಲು ಈಜಿಪ್ಟಿಗೆ
ಹೋದರು. 4ಯಾಕೋಬನು ಬೆನ್ಯಾಮೀನನನ್ನು ಕಳುಹಿ
ಸಲಿಲ್ಲ. (ಬೆನ್ಯಾಮೀನನು ಯೋಸೇಫನ ಒಡ ಹುಟ್ಟಿದ
ಒಬ್ಬನೇ ತಮ್ಮನಾಗಿದ್ದನು.) ಬೆನ್ಯಾಮೀನನಿಗೆ ಏನಾ
ದರೂ ಕೇಡಾಗಬಹುದೆಂಬ ಭಯ ಯಾಕೋಬನಿಗಿತ್ತು.
5ಕಾನಾನಿನಲ್ಲಿ ಬರಗಾಲ ಭೀಕರವಾಗಿತ್ತು. ಆದ್ದರಿಂದ
ದವಸಧಾನ್ಯಗಳನ್ನು ಕೊಂಡುಕೊಳ್ಳಲು ಅನೇಕ ಜನರು
ಕಾನಾನಿನಿಂದ ಈಜಿಪ್ಟಿಗೆ ಹೋದರು; ಇಸ್ರಾಯೇಲನ
ಗಂಡುಮಕ್ಕಳೂ ಅವರೊಂದಿಗೆ ಹೋದರು.
6ಯೋಸೇಫನು ಈಜಿಪ್ಟಿನ ರಾಜ್ಯಪಾಲನಾಗಿದ್ದರಿಂದ
ಅವನ ಅನುಮತಿಯಿಲ್ಲದೆ ದವಸಧಾನ್ಯಗಳನ್ನು ಕೊಂಡು
ಕೊಳ್ಳಲು ಯಾರಿಗೂ ಸಾಧ್ಯವಿರಲಿಲ್ಲ. ಯೋಸೇಫನ
ಸಹೋದರರು ಬಂದು ಅವನ ಮುಂದೆ ಅಡ್ಡಬಿದ್ದರು.
7ಯೋಸೇಫನು ಅವರನ್ನು ಕಂಡು, ತನ್ನ ಅಣ್ಣಂದಿರೆಂದು
ತಿಳಿದುಕೊಂಡನು. ಆದರೂ ಅವನು ತನಗೆ ಅವರು
ಗೊತ್ತೇ ಇಲ್ಲದಂತೆ ಅವರೊಂದಿಗೆ ಕಟುವಾಗಿ ಮಾತಾಡಿ,
ಅವರಿಗೆ, ''ನೀವು ಎಲ್ಲಿಂದ ಬಂದಿರುವಿರಿ?'' ಎಂದು
ಕೇಳಿದನು. ಸಹೋದರರು, ''ಆಹಾರವನ್ನು ಕೊಂಡು

---

**ಸಾಫ್ನತ್ಪನ್ನೇಹ** ಈಜಿಪ್ಟಿನ ಈ ಹೆಸರು ಬಹುಶಃ ''ಜೀವ ಪೋಷಕ'' ಎಂಬ ಅರ್ಥವನ್ನು ಕೊಡುತ್ತದೆ. ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ: ''ರಹಸ್ಯ ಸಂಗತಿಗಳ ವಿವರಣೆಗಾರ.''

ಕೊಳ್ಳಲು ಕಾನಾನ್ ದೇಶದಿಂದ ಬಂದಿದ್ದೇವೆ'' ಎಂದು
ಉತ್ತರಿಸಿದರು.
8ಯೋಸೇಫನು ತನ್ನ ಅಣ್ಣಂದಿರನ್ನು ಗುರುತಿಸಿದರೂ
ಅವನ ಅಣ್ಣಂದಿರು ಯೋಸೇಫನನ್ನು ಗುರುತಿಸಲಿಲ್ಲ.
9ಆಗ ಯೋಸೇಫನು ತನ್ನ ಅಣ್ಣಂದಿರ ಬಗ್ಗೆ ತಾನು ಕಂಡಿದ್ದ
ಕನಸುಗಳ ಬಗ್ಗೆ ಜ್ಞಾಪಿಸಿಕೊಂಡು ಅವರಿಗೆ, ''ನೀವು
ಆಹಾರವನ್ನು ಕೊಂಡುಕೊಳ್ಳಲು ಬಂದಿಲ್ಲ; ನೀವು ಗೂಢ
ಚಾರರು. ನಮ್ಮ ದೇಶದ ದುರ್ಬಲ ಸ್ಥಳಗಳನ್ನು ತಿಳಿದು
ಕೊಳ್ಳಲು ಬಂದಿರುವಿರಿ'' ಎಂದು ಹೇಳಿದನು.
10ಸಹೋದರರು ಅವನಿಗೆ, ''ಇಲ್ಲ! ಸ್ವಾಮೀ, ನಿಮ್ಮ
ಸೇವಕರಾದ ನಾವು ಆಹಾರವನ್ನು ಕೊಂಡುಕೊಳ್ಳಲು
ಬಂದಿದ್ದೇವೆ. 11ನಾವೆಲ್ಲರೂ ಸಹೋದರರು. ನಮ್ಮೆಲ್ಲ
ರಿಗೂ ಒಬ್ಬನೇ ತಂದೆ. ನಾವು ಯಥಾರ್ಥವಾಗಿ ಬಂದ
ವರೇ ಹೊರತು ಗೂಢಚಾರರಲ್ಲ'' ಎಂದು ಹೇಳಿದನು.
12ಯೋಸೇಫನು ಅವರಿಗೆ, ''ಇಲ್ಲ! ನಮ್ಮ ದುರ್ಬಲ
ಸ್ಥಳಗಳನ್ನು ಕಂಡುಕೊಳ್ಳುವುದಕ್ಕೆ ನೀವು ಬಂದಿದ್ದೀರಿ''
ಎಂದು ಹೇಳಿದನು.
13ಅದಕ್ಕೆ ಅವರು, ''ಇಲ್ಲ, ನಾವೆಲ್ಲಾ ಸಹೋದರರು.
ನಮ್ಮ ಕುಟುಂಬದಲ್ಲಿ ಹನ್ನೆರಡು ಮಂದಿ ಅಣ್ಣ
ತಮ್ಮಂದಿರು. ನಮ್ಮೆಲ್ಲರಿಗೂ ಒಬ್ಬನೇ ತಂದೆ. ನಮ್ಮ
ಕಿರಿಯ ತಮ್ಮನು ನಮ್ಮ ತಂದೆಯೊಂದಿಗೆ ಮನೆಯಲ್ಲಿ
ದ್ದಾನೆ; ಇನ್ನೊಬ್ಬ ತಮ್ಮನು ಹೊರಟು ಹೋದನು. ತಮ್ಮ
ಸೇವಕರಾದ ನಾವು ಕಾನಾನ್ ದೇಶದಿಂದ ಬಂದವರು''
ಎಂದು ಹೇಳಿದರು.
14ಯೋಸೇಫನು ಅವರಿಗೆ, ''ಇಲ್ಲ, ನಾನು ಹೇಳಿದಂತೆ
ನೀವು ಗೂಢಚಾರರೇ. 15ಆದರೆ ನೀವು ಹೇಳುತ್ತಿರುವುದು
ಸತ್ಯವಾಗಿದ್ದರೆ ನಿಮ್ಮ ಚಿಕ್ಕ ತಮ್ಮನು ಇಲ್ಲಿಗೆ ಬರಬೇಕು;
ಇಲ್ಲವಾದರೆ ಫರೋಹನ ಜೀವದಾಣೆ, ಅಲ್ಲಿಯವರೆಗೂ
ನೀವೂ ಈ ಸ್ಥಳದಿಂದ ಹೋಗಕೂಡದು. 16ಆದ್ದರಿಂದ
ನಿಮ್ಮಲ್ಲೊಬ್ಬನು ಹಿಂತಿರುಗಿಹೋಗಿ ನಿಮ್ಮ ಚಿಕ್ಕ
ತಮ್ಮನನ್ನು ಇಲ್ಲಿಗೆ ಕರೆದುಕೊಂಡು ಬರಬೇಕು. ಅಲ್ಲಿಯ
ವರೆಗೆ ಉಳಿದವರೆಲ್ಲರೂ ಇಲ್ಲಿ ಸೆರೆಮನೆಯಲ್ಲಿರಬೇಕು.
ನೀವು ಹೇಳುತ್ತಿರುವುದು ಸತ್ಯವೊ ಸುಳ್ಳೋ ಆಗ ನನಗೆ
ಗೊತ್ತಾಗುವುದು. ಆದರೆ ನೀವಂತೂ ಗೂಢಚಾರರೆಂದು
ತಿಳಿದುಕೊಂಡಿದ್ದೇನೆ'' ಎಂದು ಹೇಳಿದನು. 17ಆಮೇಲೆ
ಯೋಸೇಫನು ಅವರೆಲ್ಲರನ್ನು ಮೂರು ದಿನಗಳವರೆಗೆ
ಸೆರೆಮನೆಯಲ್ಲಿಟ್ಟನು.

### ಸಿಮೆಯೋನನನ್ನು ಒತ್ತೆಯಾಳಾಗಿ ಇಟ್ಟದ್ದು

18ಮೂರು ದಿನಗಳಾದ ಮೇಲೆ ಯೋಸೇಫನು ಅವ
ರಿಗೆ, ''ನಾನು ದೇವರಲ್ಲಿ ಭಯಭಕ್ತಿಯುಳ್ಳವನು. ನೀವು
ಈ ಕಾರ್ಯವೊಂದನ್ನು ಮಾಡಿದರೆ ನಾನು ನಿಮ್ಮನ್ನು
ಉಳಿಸುತ್ತೇನೆ; 19ನೀವು ಯಥಾರ್ಥವಂತರಾಗಿದ್ದರೆ,
ನಿಮ್ಮ ಸಹೋದರರಲ್ಲಿ ಒಬ್ಬನನ್ನು ಸೆರೆಮನೆಯಲ್ಲಿಡು
ತ್ತೇನೆ; ಉಳಿದವರು ನಿಮ್ಮ ಜನರಿಗಾಗಿ ದವಸಧಾನ್ಯ
ಗಳನ್ನು ತೆಗೆದುಕೊಂಡು ಹೋಗಬಹುದು. 20ಆಮೇಲೆ
ನಿಮ್ಮ ಕಿರಿಯ ತಮ್ಮನನ್ನು ನನ್ನ ಬಳಿಗೆ ಕರೆದುಕೊಂಡು
ಬಂದರೆ ನೀವು ಹೇಳುತ್ತಿರುವುದು ಸತ್ಯವೆಂದು ತಿಳಿದು
ಕೊಳ್ಳುವೆನು'' ಎಂದು ಹೇಳಿದನು.
ಸಹೋದರರು ಇದಕ್ಕೆ ಒಪ್ಪಿಕೊಂಡರು. 21ಅವರು
ಒಬ್ಬರಿಗೊಬ್ಬರು, ''ನಾವು ನಮ್ಮ ತಮ್ಮನಾದ ಯೋಸೇಫ
ನಿಗೆ ಮಾಡಿದ ಕೆಟ್ಟಕಾರ್ಯಕ್ಕಾಗಿ ಈ ಶಿಕ್ಷೆಯನ್ನು ಅನು
ಭವಿಸುತ್ತಿದ್ದೇವೆ. ಪ್ರಾಣಸಂಕಟದಲ್ಲಿದ್ದ ಅವನು ತನ್ನನ್ನು
ಕಾಪಾಡುವಂತೆ ನಮ್ಮನ್ನು ಬೇಡಿಕೊಂಡರೂ ನಾವು ಅವನ
ಮೊರೆಯನ್ನು ತಿರಸ್ಕರಿಸಿದೆವು. ಆದ್ದರಿಂದ ಈಗ ಪ್ರಾಣ
ಸಂಕಟಕ್ಕೀಡಾಗಿದ್ದೇವೆ'' ಎಂದು ಮಾತಾಡಿಕೊಂಡರು.
22ಅದಕ್ಕೆ ರೂಬೇನನು ಅವರಿಗೆ, ''ಆ ಹುಡುಗನಿಗೆ
ಕೇಡುಮಾಡಬೇಡಿ ಎಂದು ನಾನು ನಿಮಗೆ ಹೇಳಿದರೂ
ನೀನು ನನ್ನ ಮಾತನ್ನು ಕೇಳಲಿಲ್ಲ. ಆದ್ದರಿಂದ ಈಗ ನಾವು
ಅವನ ಮರಣಕ್ಕೆ ತಕ್ಕ ಶಿಕ್ಷೆ ಹೊಂದುತ್ತಿದ್ದೇವೆ'' ಎಂದು
ಹೇಳಿದನು.
23ಯೋಸೇಫನು ತನ್ನ ಸಹೋದರರೊಂದಿಗೆ
ಭಾಷಾಂತರಕಾರನ ಮೂಲಕ ಮಾತಾಡುತ್ತಿದ್ದನು. ಆದ್ದ
ರಿಂದ ಆ ಸಹೋದರರು ತಮ್ಮ ಭಾಷೆ ಯೋಸೇಫನಿಗೆ
ಅರ್ಥವಾಗುವುದಿಲ್ಲವೆಂದು ತಿಳಿದುಕೊಂಡಿದ್ದರು. ಆದರೆ
ಯೋಸೇಪನಿಗೆ ಅವರ ಮಾತುಗಳೆಲ್ಲಾ ಅರ್ಥವಾಯಿತು.
24ಅವರ ಮಾತುಗಳಿಂದ ಅವನಿಗೆ ತುಂಬ ದುಃಖ
ವಾಯಿತು. ಆದ್ದರಿಂದ ಯೋಸೇಫನು ಅವರ ಬಳಿಯಿಂದ
ಸ್ವಲ್ಪದೂರ ಹೋಗಿ ಕಣ್ಣೀರು ಸುರಿಸಿ ಹಿಂತಿರಿಗಿ ಬಂದನು.
ಬಳಿಕ ಸಹೋದರರಲ್ಲಿ ಒಬ್ಬನಾದ ಸಿಮೆಯೋನನನ್ನು
ಅವರ ಕಣ್ಣೆದುರಿನಲ್ಲೇ ಬಂಧಿಸಿದನು. 25ಆಮೇಲೆ
ಯೋಸೇಫನು ತನ್ನ ಸೇವಕರಿಗೆ, ''ಅವರ ಚೀಲಗಳಿಗೆ
ದವಸಧಾನ್ಯಗಳನ್ನು ತುಂಬಿರಿ'' ಎಂದು ಹೇಳಿದನು. ಈ
ದವಸ ಧಾನ್ಯಗಳಿಗೆ ಸಹೋದರರು ಹಣವನ್ನು ಪಾವತಿ
ಮಾಡಿದರೂ ಯೋಸೇಫನು ಆ ಹಣವನ್ನು ಇಟ್ಟುಕೊಳ್ಳ
ಲಿಲ್ಲ. ಅವನು ಆ ಹಣವನ್ನು ಅವರ ದವಸಧಾನ್ಯಗಳ
ಚೀಲಗಳಲ್ಲಿ ಇಡಿಸಿದನು. ಅಲ್ಲದೆ ಪ್ರಯಾಣಕ್ಕೆ ಬೇಕಾದ
ವಸ್ತುಗಳನ್ನೂ ಅವರಿಗೆ ಕೊಟ್ಟನು. 26ಸಹೋದರರು
ದವಸಧಾನ್ಯಗಳನ್ನು ಕತ್ತೆಗಳ ಮೇಲೆ ಹೇರಿಸಿಕೊಂಡು
ಅಲ್ಲಿಂದ ಹೊರಟರು. 27ಆ ರಾತ್ರಿ ಸಹೋದರರು ಒಂದು
ಸ್ಥಳದಲ್ಲಿ ಇಳಿದುಕೊಂಡರು. ಸಹೋದರರಲ್ಲಿ ಒಬ್ಬನು
ಕತ್ತೆಗೋಸ್ಕರ ಸ್ವಲ್ಪ ದವಸಧಾನ್ಯಗಳನ್ನು ತೆಗೆದುಕೊಳ್ಳಲು
ತನ್ನ ಚೀಲವನ್ನು ಬಿಚ್ಚಿದಾಗ ತಾನು ಪಾವತಿ ಮಾಡಿದ್ದ
ಹಣವು ಚೀಲದಲ್ಲಿರುವುದನ್ನು ನೋಡಿದನು. 28ಅವನು

ತನ್ನ ಉಳಿದ ಸಹೋದರರಿಗೆ, ''ನೋಡಿ, ನಾನು ದವಸ
ಧಾನ್ಯಗಳಿಗೆ ಕೊಟ್ಟ ಹಣ ಇಲ್ಲೇ ಇದೆ. ಯಾರೋ ಒಬ್ಬನು
ಹಣವನ್ನು ಮತ್ತೆ ನನ್ನ ಚೀಲದಲ್ಲಿ ಇಟ್ಟಿರುವನು'' ಎಂದು
ಹೇಳಿದನು. ಸಹೋದರರಿಗೆ ತುಂಬ ಭಯವಾಯಿತು.
ಅವರು ಒಬ್ಬರಿಗೊಬ್ಬರು, ''ದೇವರು ನಮಗೆ ಮಾಡುತ್ತಿ
ರುವುದೇನು?'' ಎಂದು ಮಾತಾಡಿಕೊಂಡರು.

### ಸಹೋದರರು ಯಾಕೋಬನಿಗೆ ನೀಡಿದ ವರದಿ

29ಸಹೋದರರು ಕಾನಾನ್ ದೇಶದಲ್ಲಿದ್ದ ತಮ್ಮ ತಂದೆ
ಯಾದ ಯಾಕೋಬನ ಬಳಿಗೆ ಹೋದರು. ನಡೆದ ಸಂಗತಿ
ಗಳನ್ನೆಲ್ಲಾ ಯಾಕೋಬನಿಗೆ ಹೇಳುತ್ತಾ, 30''ಆ ದೇಶದ
ರಾಜ್ಯಪಾಲನು ನಮ್ಮನ್ನು ಗೂಢಚಾರರೆಂದು ಭಾವಿಸಿ
ನಮ್ಮೊಂದಿಗೆ ಒರಟಾಗಿ ಮಾತನಾಡಿದನು. 31ನಾವು ಅವ
ನಿಗೆ, 'ನಾವು ಯಥಾರ್ಥವಂತರು; ಗೂಢಚಾರರಲ್ಲ'
ಎಂದು ಹೇಳಿದೆವು. 32ನಾವು ಹನ್ನೆರಡು ಮಂದಿ ಅಣ್ಣ
ತಮ್ಮಂದಿರೆಂದೂ ನಮಗೆ ಒಬ್ಬನೇ ತಂದೆಯೆಂದೂ ಅವ
ನಿಗೆ ಹೇಳಿದೆವು. ನಮ್ಮ ಒಬ್ಬ ತಮ್ಮನು ಹೊರಟು ಹೋದ
ನೆಂದೂ ನಮ್ಮ ಕಿರಿಯ ತಮ್ಮನು ಕಾನಾನ್ ದೇಶದಲ್ಲಿ
ರುವ ನಮ್ಮ ಮನೆಯಲ್ಲಿರುವುದಾಗಿಯೂ ಅವನಿಗೆ
ಹೇಳಿದೆವು.

33''ಆಗ ಆ ದೇಶದ ರಾಜ್ಯಪಾಲನು,'ನೀವು ಯಥಾರ್ಥ
ವಂತರೆಂದು ತೋರಿಸಬೇಕಾದರೆ ನಿಮ್ಮ ಸಹೋದರರಲ್ಲಿ
ಒಬ್ಬನನ್ನು ನನ್ನ ಬಳಿಯಲ್ಲಿ ಬಿಟ್ಟು ನಿಮ್ಮ ಕುಟುಂಬಗಳಿಗೆ
ದವಸಧಾನ್ಯಗಳನ್ನು ತೆಗೆದುಕೊಂಡು ಹೋಗಿರಿ.
34ಆಮೇಲೆ ನಿಮ್ಮ ಕಿರಿಯ ತಮ್ಮನನ್ನು ನನ್ನ ಬಳಿಗೆ ಕರೆದು
ಕೊಂಡು ಬನ್ನಿ. ಆಗ ನೀವು ಯಥಾರ್ಥರಾದವರೋ
ಗೂಢಚಾರರೋ ಎಂದು ಗೊತ್ತಾಗುವುದು. ನೀವು ಸತ್ಯ
ವನ್ನು ಹೇಳಿದ್ದರೆ ನಿಮ್ಮ ಸಹೋದರನನ್ನು ನಿಮಗೆ ಒಪ್ಪಿಸು
ವೆನು; ನಮ್ಮ ದೇಶದಲ್ಲಿ ಆಹಾರವನ್ನು ಕೊಳ್ಳಲು ನಿಮಗೆ
ಯಾವ ತಡೆಯೂ ಇರುವುದಿಲ್ಲ' ಎಂದು ಹೇಳಿದನು''
ಎಂದರು.

35ಬಳಿಕ ಸಹೋದರರು ತಮ್ಮ ಚೀಲಗಳಿಂದ ದವಸ
ಧಾನ್ಯಗಳನ್ನು ತೆಗೆಯಲು ಹೋದಾಗ ಪ್ರತಿಯೊಬ್ಬ
ಸಹೋದರನ ಚೀಲದಲ್ಲಿಯೂ ತಾವು ಪಾವತಿ ಮಾಡಿದ್ದ
ಹಣವನ್ನು ಕಂಡು ತುಂಬ ಭಯಗೊಂಡರು.

36ಯಾಕೋಬನು ಅವರಿಗೆ, ''ನಾನು ನನ್ನ ಮಕ್ಕಳನ್ನೆಲ್ಲ
ಕಳೆದುಕೊಳ್ಳಬೇಕೆಂಬುದು ನಿಮಗೆ ಇಷ್ಟವೇ?
ಯೋಸೇಫನು ಇಲ್ಲವಾದನು. ಸಿಮೆಯೋನನೂ ಇಲ್ಲ
ವಾದನು. ಈಗ ಬೆನ್ಯಾಮೀನನನ್ನು ತೆಗೆದುಕೊಂಡು
ಹೋಗಬೇಕೆಂದಿರುವಿರಿ'' ಎಂದು ಹೇಳಿದನು.

37ರೂಬೇನನು ತನ್ನ ತಂದೆಗೆ, ''ಅಪ್ಪಾ, ನಾನು
ಬೆನ್ಯಾಮೀನನನ್ನು ಕರೆದುಕೊಂಡು ಬರದಿದ್ದರೆ ನೀನು
ನನ್ನ ಇಬ್ಬರು ಗಂಡುಮಕ್ಕಳನ್ನು ಕೊಲ್ಲಬಹುದು. ನನ್ನನ್ನು
ನಂಬು. ನಾನು ಬೆನ್ಯಾಮೀನನನ್ನು ನಿನ್ನ ಬಳಿಗೆ ಕರೆದು
ಕೊಂಡು ಬರುವೆನು'' ಎಂದು ಹೇಳಿದನು.

38ಯಾಕೋಬನು, ''ನಾನು ನಿಮ್ಮೊಂದಿಗೆ ಬೆನ್ಯಾಮೀ
ನನನ್ನು ಕಳುಹಿಸಿಕೊಡುವುದಿಲ್ಲ. ಅವನ ಸಹೋದರನು
ಸತ್ತುಹೋದನು; ನನ್ನ ಹೆಂಡತಿಯಾದ ರಾಹೇಳಲ್ಲಿ
ಹುಟ್ಟಿದ ಗಂಡು ಮಕ್ಕಳಲ್ಲಿ ಇವನೊಬ್ಬನೇ ಉಳಿದಿರು
ವುದು. ಈಜಿಪ್ಟಿಗೆ ಪ್ರಯಾಣ ಮಾಡುವಾಗ ಇವನಿಗೆ
ಅಪಾಯ ಸಂಭವಿಸಿದರೆ ವಯಸ್ಸಾದ ನಾನು ದುಃಖ
ದಿಂದಲೇ ಸಮಾಧಿ ಸೇರಬೇಕಾಗುವುದು'' ಎಂದು
ಹೇಳಿದನು.

### ಯಾಕೋಬನು ಬೆನ್ಯಾಮೀನನನ್ನು ಈಜಿಪ್ಟಿಗೆ ಕಳುಹಿಸಲು ಒಪ್ಪಿದ್ದು

43 ಬರಗಾಲವು ದೇಶದಲ್ಲಿ ತುಂಬ ಭೀಕರ
ವಾಗಿತ್ತು. 2ಅವರು ಈಜಿಪ್ಟಿನಿಂದ ತಂದಿದ್ದ
ದವಸಧಾನ್ಯಗಳನ್ನೆಲ್ಲ ಊಟ ಮಾಡಿದರು. ದವಸ
ಧಾನ್ಯಗಳು ಮುಗಿದುಹೋದಾಗ ಯಾಕೋಬನು, ತನ್ನ
ಗಂಡು ಮಕ್ಕಳಿಗೆ, ''ಈಜಿಪ್ಟಿಗೆ ಮತ್ತೆ ಹೋಗಿ ನಮಗೆ
ಊಟಕ್ಕೆ ದವಸಧಾನ್ಯಗಳನ್ನು ಕೊಂಡುಕೊಂಡು ಬನ್ನಿ''
ಎಂದು ಹೇಳಿದನು.

3ಯೆಹೂದನು ಯಾಕೋಬನಿಗೆ, ''ಆ ದೇಶದ ರಾಜ್ಯ
ಪಾಲನು ನಮಗೆ ಎಚ್ಚರಿಕೆ ಕೊಟ್ಟಿದ್ದಾನೆ. ಅವನು, 'ನೀವು
ನಿಮ್ಮ ಸಹೋದರನನ್ನು ನನ್ನ ಬಳಿಗೆ ಕರೆದುಕೊಂಡು
ಬಾರದೆ ನನ್ನನ್ನು ಭೇಟಿಯಾಗಕೂಡದು' ಎಂದು ಹೇಳಿ
ದ್ದಾನೆ. 4ನೀನು ನಮ್ಮೊಡನೆ ಬೆನ್ಯಾಮೀನನನ್ನು ಕಳುಹಿಸಿ
ದರೆ, ನಾವು ಹೋಗಿ ದವಸಧಾನ್ಯಗಳನ್ನು ಕೊಂಡು
ಕೊಂಡು ಬರುವೆವು. 5ಆದರೆ ಬೆನ್ಯಾಮೀನನನ್ನು ಕಳುಹಿ
ಸದಿದ್ದರೆ, ನಾವು ಹೋಗುವುದಿಲ್ಲ; ಆ ಮನುಷ್ಯನು ನಮಗೆ
ಬೆನ್ಯಾಮೀನನಿಲ್ಲದೆ ಬರಕೂಡದೆಂದು ಎಚ್ಚರಿಕೆ
ಕೊಟ್ಟಿದ್ದಾನೆ'' ಅಂದನು.

6ಇಸ್ರೇಲನು (ಯಾಕೋಬನು), ''ನಿಮಗೆ ಮತ್ತೊಬ್ಬ
ಸಹೋದರನಿರುವುದಾಗಿ ನೀವು ಆ ಮನುಷ್ಯನಿಗೆ ಯಾಕೆ
ಹೇಳಿದಿರಿ? ನೀವು ಅಂಥ ಕೆಟ್ಟದ್ದನ್ನು ಯಾಕೆ
ಮಾಡಿದಿರಿ?'' ಎಂದು ಕೇಳಿದನು.

7ಸಹೋದರರು, ''ಆ ಮನುಷ್ಯನು ನಮ್ಮ ವಿಷಯವಾ
ಗಿಯೂ ನಮ್ಮ ಕುಟುಂಬದ ವಿಷಯವಾಗಿಯೂ ತಿಳಿದು
ಕೊಳ್ಳಲು ಸೂಕ್ಷ್ಮವಾಗಿ ಪ್ರಶ್ನೆಗಳನ್ನು ಕೇಳಿದನು. ಅವನು
ನಮಗೆ, 'ನಿಮ್ಮ ತಂದೆಯು ಇನ್ನೂ ಜೀವಂತವಾಗಿರು
ವನೇ? ನಿಮಗೆ ಮನೆಯಲ್ಲಿ ಮತ್ತೊಬ್ಬ ಸಹೋದರನಿರು
ವನೇ?' ಎಂದು ಕೇಳಿದನು. ನಾವು ಅವನ ಪ್ರಶ್ನೆಗಳಿಗೆ
ಮಾತ್ರ ಉತ್ತರಕೊಟ್ಟೆವು. ನಮ್ಮ ಸಹೋದರನನ್ನು ತನ್ನ

ಬಳಿಗೆ ಕರೆದುಕೊಂಡು ಬರಬೇಕೆಂದು ಅವನು ಹೇಳುತ್ತಾ
ನೆಂದು ನಮಗೆ ತಿಳಿದಿರಲಿಲ್ಲ'' ಎಂದು ಹೇಳಿದರು.
8ಆ ಮೇಲೆ ಯೆಹೂದನು ತನ್ನ ತಂದೆಯಾದ ಇಸ್ರೇಲ
ನಿಗೆ, ''ನನ್ನೊಂದಿಗೆ ಬೆನ್ಯಾಮೀನನನ್ನು ಕಳುಹಿಸಿಕೊಡು.
ನಾನು ಅವನನ್ನು ನೋಡಿಕೊಳ್ಳುವೆನು. ನಾವು ಈಜಿಪ್ಟಿಗೆ
ಹೋಗಿ ಆಹಾರವನ್ನು ತರಬೇಕು. ಇಲ್ಲವಾದರೆ ನಾವೂ
ಸಾಯುವೆವು, ನಮ್ಮ ಮಕ್ಕಳೂ ಸಾಯುವರು. 9ಅವನು
ಸುರಕ್ಷಿತವಾಗಿರುವಂತೆ ನಾನು ನೋಡಿಕೊಳ್ಳುವೆನು.
ನಾನು ಅವನಿಗೆ ಜವಾಬ್ದಾರನಾಗಿರುತ್ತೇನೆ. ನಾನು ಅವ
ನನ್ನು ನಿನ್ನ ಬಳಿಗೆ ಮತ್ತೆ ಕರೆದುಕೊಂಡು ಬರದಿದ್ದರೆ,
ನೀನು ಸದಾಕಾಲ ನನ್ನನ್ನು ದೂಷಿಸಬಹುದು.
10ಮೊದಲೇ ನೀನು ನಮ್ಮನ್ನು ಕಳುಹಿಸಿಕೊಟ್ಟಿದ್ದರೆ,
ಈಗಾಗಲೇ ಎರಡು ಸಲ ಆಹಾರವನ್ನು ತೆಗೆದುಕೊಂಡು
ಬರಬಹುದಾಗಿತ್ತು'' ಎಂದು ಹೇಳಿದನು.
11ಅದಕ್ಕೆ ಅವರ ತಂದೆಯಾದ ಇಸ್ರೇಲನು, ''ಇದು ನಿಜ
ವಾಗಿಯೂ ಸತ್ಯವಾಗಿದ್ದರೆ, ನಿನ್ನೊಂದಿಗೆ ಬೆನ್ಯಾಮೀನ
ನನ್ನು ಕರೆದುಕೊಂಡು ಹೋಗು. ಆದರೆ ರಾಜ್ಯಪಾಲನಿಗೆ
ಶ್ರೇಷ್ಠವಾದ ಕೆಲವು ಉಡುಗೊರೆಗಳನ್ನೂ ತೆಗೆದು
ಕೊಂಡು ಹೋಗಿ. ನಮ್ಮ ನಾಡಿನಲ್ಲಿ ದೊರಕುವ ಜೇನು,
ಆಕ್ರೋಡು, ಬಾದಾಮಿ, ಹಾಲುವುಡ್ಡಿ ಮತ್ತು
ಗೋಲರಸ ಇವುಗಳನ್ನು ತೆಗೆದುಕೊಳ್ಳಿ. 12ಈ ಸಲ ಎರಡ
ರಷ್ಟು ಹಣವನ್ನು ನಿಮ್ಮೊಂದಿಗೆ ತೆಗೆದುಕೊಂಡು ಹೋಗಿ.
ಕಳೆದ ಸಲ ನೀವು ಪಾವತಿ ಮಾಡಿದ್ದರೂ ಹಿಂತಿರುಗಿಸ
ಲಾದ ಹಣವನ್ನು ತೆಗೆದುಕೊಂಡು ಹೋಗಿ. ಒಂದು ವೇಳೆ
ರಾಜ್ಯಪಾಲನು ತಪ್ಪು ಮಾಡಿದ್ದಿರಬೇಕು. 13ಬೆನ್ಯಾಮೀನ
ನನ್ನು ಕರೆದುಕೊಂಡು ಆ ಮನುಷ್ಯನ ಬಳಿಗೆ ಹಿಂತಿರುಗಿ
ಹೋಗಿರಿ. 14ನೀವು ರಾಜ್ಯಪಾಲನ ಮುಂದೆ ನಿಂತು
ಕೊಂಡಾಗ ಸರ್ವಶಕ್ತನಾದ ದೇವರು ನಿಮಗೆ ಸಹಾಯ
ಮಾಡುವಂತೆ ನಾನು ಪ್ರಾರ್ಥಿಸುತ್ತೇನೆ. ಬೆನ್ಯಾಮೀನ
ನನ್ನೂ ಸಿಮೆಯೋನನನ್ನೂ ಕಳುಹಿಸಿಕೊಡುವಂತೆ ನೀವು
ಸುರಕ್ಷಿತವಾಗಿ ಮರಳಿಬರುವಂತೆಯೂ ನಾನು
ಪ್ರಾರ್ಥಿಸುತ್ತೇನೆ. ಇಲ್ಲವಾದರೆ, ನನ್ನ ಮಗನನ್ನು ಕಳೆದು
ಕೊಂಡು ನಾನು ಮತ್ತೆ ದುಃಖಿತನಾಗುವೆ'' ಎಂದು
ಹೇಳಿದನು.15ಆದ್ದರಿಂದ ಸಹೋದರರು ರಾಜ್ಯಪಾಲನಿಗೆ
ಕೊಡಲು ಉಡುಗೊರೆಗಳನ್ನು ತೆಗೆದುಕೊಂಡರು; ಮೊದ
ಲನೆ ಸಲ ತೆಗೆದುಕೊಂಡು ಹೋಗಿದ್ದ ಹಣಕ್ಕಿಂತ
ಎರಡರಷ್ಟು ಹೆಚ್ಚಾಗಿ ತೆಗೆದುಕೊಂಡರು. ಬೆನ್ಯಾಮೀನನು
ಸಹೋದರರೊಂದಿಗೆ ಈಜಿಪ್ಟಿಗೆ ಹೋದನು.

### ಯೋಸೇಫನು ಸಹೋದರರನ್ನು ಮನೆಗೆ ಆಹ್ವಾನಿಸಿದ್ದು

16ಸಹೋದರರೊಂದಿಗೆ ಬೆನ್ಯಾಮೀನನು ಇರುವು
ದನ್ನು ಕಂಡ ಯೋಸೇಫನು ತನ್ನ ಸೇವಕನಿಗೆ, ''ಈ
ಜನರನ್ನು ನನ್ನ ಮನೆಯೊಳಗೆ ಕರೆದುಕೊಂಡು ಹೋಗು;
ಕುರಿಯನ್ನು ಕೊಯ್ದು ಅಡಿಗೆ ಮಾಡು. ಈ ಜನರು ಈ
ಹೊತ್ತು ಮಧ್ಯಾಹ್ನ ನನ್ನೊಂದಿಗೆ ಊಟಮಾಡುವರು''
ಎಂದು ಹೇಳಿದನು. 17ಅಂತೆಯೇ ಆ ಸೇವಕನು ಸಹೋದ
ರರನ್ನು ಮನೆಯೊಳಗೆ ಕರೆದುಕೊಂಡು ಹೋದನು.
18ಆಗ ಸಹೋದರರಿಗೆ ಭಯವಾಯಿತು. ಅವರು,
''ಕಳೆದ ಸಲ ನಮ್ಮ ಚೀಲಗಳಿಗೆ ಮತ್ತೆ ಹಾಕಿದ್ದ ಹಣದ
ಕಾರಣದಿಂದಾಗಿ ನಮ್ಮನ್ನು ಇಲ್ಲಿಗೆ ಕರೆದುಕೊಂಡು ಬಂದಿ
ದ್ದಾರೆ. ನಮ್ಮನ್ನು ತಪ್ಪಿತಸ್ಥರೆಂದು ನಿರ್ಣಯಿಸಿ ನಮ್ಮ ಕತ್ತೆ
ಗಳನ್ನು ವಶಮಾಡಿಕೊಳ್ಳುವರು; ನಮ್ಮನ್ನೂ ಗುಲಾಮರ
ನ್ನಾಗಿ ಮಾಡಿಕೊಳ್ಳುವರು'' ಎಂದು ಮಾತಾಡಿಕೊಂಡರು.
19ಆದ್ದರಿಂದ ಸಹೋದರರು ಯೋಸೇಫನ ಮನೆಯ
ಮೇಲ್ವಿಚಾರಕನಾದ ಸೇವಕನ ಬಳಿಗೆ ಹೋಗಿ ಪ್ರವೇಶ
ದ್ವಾರದ ಬಳಿಯಲ್ಲಿ ಅವನೊಂದಿಗೆ ಮಾತಾಡಿದರು.
20ಅವರು, ''ಸ್ವಾಮೀ, ನಾವು ಪ್ರಮಾಣಮಾಡಿ ಹೇಳು
ತ್ತೇವೆ, ಇದು ಸತ್ಯ ಕಳೆದ ಸಲ ನಾವು ಆಹಾರವನ್ನು ಕೊಂಡು
ಕೊಳ್ಳಲು ಬಂದಿದ್ದೆವು. 21-22ಮನೆಗೆ ಹೋಗುವಾಗ
ದಾರಿಯಲ್ಲಿ ನಾವು ನಮ್ಮ ಚೀಲಗಳನ್ನು ಬಿಚ್ಚಿದಾಗ ಪ್ರತಿ
ಯೊಂದು ಚೀಲದಲ್ಲಿಯೂ ನಾವು ಪಾವತಿಮಾಡಿದ್ದ ಹಣ
ವನ್ನು ಕಂಡೆವು. ಆ ಹಣವು ಅಲ್ಲಿಗೆ ಹೇಗೆ ಬಂತೋ ನಮಗೆ
ಗೊತ್ತಿಲ್ಲ. ಆದರೆ ಆ ಹಣವನ್ನು ನಿಮಗೆ ಕೊಡುವದಕ್ಕಾಗಿ
ನಮ್ಮೊಂದಿಗೆ ತೆಗೆದುಕೊಂಡು ಬಂದಿದ್ದೇವೆ. ಈ ಸಲ ನಾವು
ಖರೀದಿ ಮಾಡಬೇಕೆಂದಿರುವ ಆಹಾರಕ್ಕೆ ಕೊಡಲು ಹೆಚ್ಚು
ಹಣವನ್ನು ತಂದಿದ್ದೇವೆ'' ಎಂದು ಹೇಳಿದರು.
23ಅದಕ್ಕೆ ಸೇವಕನು, ''ಭಯಪಡಬೇಡಿ, ಚಿಂತಿಸ
ಬೇಡಿ. ನಿಮ್ಮ ದೇವರೂ ನಿಮ್ಮ ತಂದೆಯ ದೇವರೂ ಹಣ
ವನ್ನು ಉಡುಗೊರೆಯಾಗಿ ನಿಮ್ಮ ಚೀಲಗಳಲ್ಲಿ ಇಟ್ಟಿದ್ದಿರ
ಬೇಕು. ಕಳೆದ ಸಲ ನೀವು ದವಸಧಾನ್ಯಗಳಿಗಾಗಿ ಹಣ
ಪಾವತಿ ಮಾಡಿದ್ದು ನನಗೆ ನೆನಪಿದೆ'' ಎಂದು ಹೇಳಿದನು.
ಬಳಿಕ ಆ ಸೇವಕನು ಸಿಮೆಯೋನನನ್ನು ಸೆರೆಮನೆಯಿಂದ
ಕರೆತಂದನು. 24ಸೇವಕನು ಅವರನ್ನು ಯೋಸೇಫನ ಮನೆ
ಯೊಳಗೆ ಕರೆದುಕೊಂಡು ಹೋಗಿ ಅವರಿಗೆ ನೀರನ್ನು
ಕೊಟ್ಟನು. ಅವರು ತಮ್ಮ ಕಾಲುಗಳನ್ನು ತೊಳೆದು
ಕೊಂಡರು. ಬಳಿಕ ಅವನು ಅವರ ಕತ್ತೆಗಳಿಗೆ ಆಹಾರವನ್ನು
ಹಾಕಿದನು.
25ತಾವು ಯೋಸೇಫನೊಂದಿಗೆ ಊಟ ಮಾಡುವುದಾಗಿ
ಸಹೋದರರಿಗೆ ತಿಳಿಯಿತು. ಆದ್ದರಿಂದ ಅವರು ಅವನಿಗೆ
ಕೊಡಲು ತಮ್ಮ ಉಡುಗೊರೆಗಳನ್ನು ಮಧ್ಯಾಹ್ನದವರೆಗೆ
ಸಿದ್ಧಪಡಿಸಿದರು.
26ಯೋಸೇಫನು ಮನೆಗೆ ಬಂದಾಗ, ಸಹೋದರರು
ತಾವು ತಂದಿದ್ದ ಉಡುಗೊರೆಗಳನ್ನು ಅವನಿಗೆ ಕೊಟ್ಟರು.
ಬಳಿಕ ಅವರು ನೆಲದವರೆಗೆ ಬಾಗಿ ನಮಸ್ಕರಿಸಿದರು.

[27]ಯೋಸೇಫನು ಅವರ ಯೋಗಕ್ಷೇಮವನ್ನು ವಿಚಾರಿಸಿದನು. ಯೋಸೇಫನು ''ನೀವು ನನಗೆ ತಿಳಿಸಿದ ನಿಮ್ಮ ವೃದ್ಧನಾದ ತಂದೆ ಕ್ಷೇಮವಾಗಿದ್ದಾನೆಯೇ? ಇನ್ನೂ ಜೀವಂತವಾಗಿರುವನೇ?'' ಎಂದು ಕೇಳಿದನು.

[28]ಸಹೋದರರು, ''ಸ್ವಾಮೀ, ನಮ್ಮ ತಂದೆ ಕ್ಷೇಮವಾಗಿದ್ದಾನೆ. ಅವನು ಇನ್ನೂ ಜೀವಂತವಾಗಿದ್ದಾನೆ'' ಎಂದು ಹೇಳಿದನು. ಬಳಿಕ ಅವರು ಮತ್ತೆ ಯೋಸೇಫನಿಗೆ ಅಡ್ಡಬಿದ್ದರು.

### ಯೋಸೇಫನು ತನ್ನ ಸಹೋದರನಾದ ಬೆನ್ಯಾಮೀನನನ್ನು ನೋಡಿದ್ದು

[29]ಬಳಿಕ ಯೋಸೇಫನು ತನ್ನ ಸಹೋದರನಾದ ಬೆನ್ಯಾಮೀನನನ್ನು ನೋಡಿದನು. (ಬೆನ್ಯಾಮೀನ ಮತ್ತು ಯೋಸೇಫ ಒಂದೇ ತಾಯಿಯ ಮಕ್ಕಳು.) ಯೋಸೇಫನು, ''ನೀವು ನನಗೆ ತಿಳಿಸಿದ ನಿಮ್ಮ ಕಿರಿಯ ತಮ್ಮನು ಇವನೋ?'' ಎಂದು ಕೇಳಿದನು. ಆ ಮೇಲೆ ಯೋಸೇಫನು ಬೆನ್ಯಾಮೀನನಿಗೆ ''ಮಗನೇ, ದೇವರು ನಿನಗೆ ಒಳ್ಳೆಯದನ್ನು ಮಾಡಲಿ'' ಎಂದು ಹೇಳಿದನು.

[30]ಯೋಸೇಫನು ತನ್ನ ತಮ್ಮನಾದ ಬೆನ್ಯಾಮೀನನನ್ನು ಬಹಳವಾಗಿ ಪ್ರೀತಿಸುತ್ತಿದ್ದ ಕಾರಣ ಆನಂದದಿಂದ ಅವನ ಕಣ್ಣಲ್ಲಿ ನೀರು ಉಕ್ಕೇರಿಬಂದದ್ದರಿಂದ ಕೋಣೆಯೊಳಗೆ ಹೋಗಿ ಕಣ್ಣೀರಿಟ್ಟನು.

[31]ಬಳಿಕ ಯೋಸೇಫನು ತನ್ನ ಮುಖವನ್ನು ತೊಳೆದುಕೊಂಡು ಮತ್ತು ಮನಸ್ಸನ್ನು ಬಿಗಿ ಹಿಡಿದುಕೊಂಡು ಬಂದು, ''ಊಟ ಬಡಿಸಿರಿ'' ಎಂದು ಅಪ್ಪಣೆ ಕೊಟ್ಟನು.

[32]ಯೋಸೇಫನೊಬ್ಬನೇ ಒಂದು ಮೇಜಿನಲ್ಲಿ ಊಟ ಮಾಡಿದನು. ಅವನ ಸಹೋದರರು ಒಟ್ಟಾಗಿ ಮತ್ತೊಂದು ಮೇಜಿನಲ್ಲಿ ಊಟ ಮಾಡಿದರು. ಈಜಿಪ್ಟಿನವರು ಬೇರೊಂದು ಮೇಜಿನಲ್ಲಿ ಊಟ ಮಾಡಿದರು. ಇಬ್ರಿಯ ಜನರೊಂದಿಗೆ ಊಟ ಮಾಡುವುದು ತಪ್ಪೆಂಬುದು ಅವರ ನಂಬಿಕೆಯಾಗಿತ್ತು. [33]ಯೋಸೇಫನ ಎದುರಿನಸಾಲಿನಲ್ಲಿ ಕುಳಿತುಕೊಳ್ಳಲು ಯೋಸೇಫನ ಸಹೋದರರಿಗೆ ಹಿರಿಯವನಿಂದ ಮೊದಲುಗೊಂಡು ಕಿರಿಯವನವರೆಗೆ ಕ್ರಮವಾಗಿ ಸ್ಥಳವನ್ನು ಗೊತ್ತುಪಡಿಸಲಾಗಿತ್ತು. ಆದ್ದರಿಂದ ಸಹೋದರರೆಲ್ಲಾ ಅತ್ಯಾಶ್ಚರ್ಯದಿಂದ ಒಬ್ಬರನ್ನೊಬ್ಬರು ನೋಡತೊಡಗಿದರು. [34]ಸೇವಕರು ಯೋಸೇಫನ ಮೇಜಿನಿಂದ ಊಟವನ್ನು ತೆಗೆದುಕೊಂಡು ಅವರಿಗೆ ಬಡಿಸುತ್ತಿದ್ದರು. ಆದರೆ ಸೇವಕರು ಬೆನ್ಯಾಮೀನನಿಗೆ ಬೇರೆಯವರಿಗಿಂತ ಐದರಷ್ಟು ಹೆಚ್ಚಾಗಿ ಕೊಟ್ಟರು. ಸಹೋದರರು ಯಥೇಚ್ಛವಾಗಿ ಊಟ ಮಾಡಿದರು.

### ಯೋಸೇಫನ ಸಂಚು

44 ಬಳಿಕ ಯೋಸೇಫನು ತನ್ನ ಸೇವಕನಿಗೆ, ಆಜ್ಞೆ ಮಾಡಿದನು. ಯೋಸೇಫನು, ''ಈ ಜನರು ತೆಗೆದುಕೊಂಡು ಹೋಗಬಹುದಾದಷ್ಟು ದವಸಧಾನ್ಯಗಳನ್ನು ಇವರ ಚೀಲಗಳಲ್ಲಿ ತುಂಬಿ ಪ್ರತಿಯೊಬ್ಬನ ಹಣವನ್ನೂ ಧಾನ್ಯದೊಂದಿಗೆ ಚೀಲದಲ್ಲಿಡು. [2]ಕಿರಿಯ ಸಹೋದರನ ಚೀಲದಲ್ಲಿಯೂ ಹಣವನ್ನು ಇಡು. ಅಲ್ಲದೆ ನನ್ನ ವಿಶೇಷವಾದ ಬೆಳ್ಳಿ ಬಟ್ಟಲನ್ನು ಸಹ ಅವನ ಚೀಲದಲ್ಲಿಡು'' ಎಂದು ಆಜ್ಞಾಪಿಸಿದನು. ಅಂತೆಯೇ ಸೇವಕನು ಮಾಡಿದನು.

[3]ಮರುದಿನ ಮುಂಜಾನೆ ಸಹೋದರರನ್ನು ಮತ್ತು ಅವರ ಕತ್ತೆಗಳನ್ನು ಅವರ ದೇಶಕ್ಕೆ ಮರಳಿ ಕಳುಹಿಸಲಾಯಿತು. [4]ಅವರು ನಗರವನ್ನು ಬಿಟ್ಟುಹೋದ ಮೇಲೆ, ಯೋಸೇಫನು ತನ್ನ ಸೇವಕನಿಗೆ, ''ಹೋಗು, ಆ ಜನರನ್ನು ಹಿಂಬಾಲಿಸು. ಅವರನ್ನು ತಡೆದು ಅವರಿಗೆ, 'ನಾವು ನಿಮಗೆ ಒಳ್ಳೆಯವರಾಗಿದ್ದೆವು; ಆದರೆ ನೀವು ನಮಗೇಕೆ ಕೆಟ್ಟದ್ದನ್ನು ಮಾಡಿದಿರಿ? ನನ್ನ ಒಡೆಯನ ಬೆಳ್ಳಿಬಟ್ಟಲನ್ನು ನೀವೇಕೆ ಕದ್ದುಕೊಂಡು ಬಂದಿರಿ?

[5]ಈ ಬಟ್ಟಲಿನಲ್ಲಿ ನನ್ನ ಒಡೆಯನು ಕುಡಿಯುತ್ತಾನೆ. ದೇವರಿಗೆ ಪ್ರಶ್ನೆಗಳನ್ನು ಕೇಳಲು ಅವನು ಈ ಬಟ್ಟಲನ್ನೇ ಉಪಯೋಗಿಸುವನು. ನೀವು ಅವನ ಬಟ್ಟಲನ್ನು ಕದ್ದುಕೊಂಡು ತಪ್ಪುಮಾಡಿದಿರಿ' ಎಂದು ಹೇಳು'' ಎಂಬುದಾಗಿ ತಿಳಿಸಿದನು.

[6]ಅಂತೆಯೇ ಸೇವಕನು ಸಹೋದರರನ್ನು ಹಿಂಬಾಲಿಸಿ ಅವರನ್ನು ತಡೆದು ನಿಲ್ಲಿಸಿದನು. ಯೋಸೇಫನು ಹೇಳಿದಂತೆಯೇ ಅವನು ಅವರಿಗೆ ಹೇಳಿದನು.

[7]ಆದರೆ ಸಹೋದರರು ಸೇವಕನಿಗೆ, ''ರಾಜ್ಯಪಾಲನು ಈ ರೀತಿ ಹೇಳುವುದೇಕೆ? ನಾವು ಇಂಥಾ ಕೃತ್ಯವನ್ನು ಮಾಡಿಲ್ಲ. [8]ಮೊದಲು ನಮ್ಮ ಚೀಲಗಳಲ್ಲಿ ಸಿಕ್ಕಿದ ಹಣವನ್ನು ನಾವು ಕಾನಾನ್ ದೇಶದಿಂದ ಮತ್ತೆ ತಂದುಕೊಟ್ಟೆವು. ಆದ್ದರಿಂದ ಖಂಡಿತವಾಗಿ ನಾವು ನಿನ್ನ ಒಡೆಯನ ಮನೆಯಿಂದ ಬೆಳ್ಳಿಯನ್ನಾಗಲೀ ಬಂಗಾರವನ್ನಾಗಲೀ ಕದ್ದುಕೊಂಡಿಲ್ಲ.

[9]ನೀನು ಬೆಳ್ಳಿಯ ಬಟ್ಟಲನ್ನು ನಮ್ಮ ಯಾರ ಚೀಲಗಳಲ್ಲಿ ಕಂಡರೂ, ಆ ವ್ಯಕ್ತಿಯೂ ಸಾಯಲಿ, ನೀನು ಅವನನ್ನು ಕೊಲ್ಲಬಹುದು; ನಾವು ನಿನ್ನ ಗುಲಾಮರಾಗಿರುವೆವು'' ಎಂದು ಹೇಳಿದರು.

[10]ಸೇವಕನು, ''ನೀವು ಹೇಳಿದಂತೆಯೇ ಆಗಲಿ. ಆದರೆ ನಾನು ಅವನನ್ನು ಕೊಲ್ಲುವುದಿಲ್ಲ. ಯಾರಲ್ಲಿ ಬೆಳ್ಳಿಯ ಬಟ್ಟಲು ಸಿಕ್ಕುತ್ತದೊ ಅವನು ನನ್ನ ಗುಲಾಮನಾಗಿರಬೇಕು; ಉಳಿದವರು ಹೋಗಬಹುದು'' ಎಂದು ಹೇಳಿದನು.

## ಸಂಚಿನಿಂದ ಬೆನ್ಯಾಮೀನನು ಸಿಕ್ಕಿಕೊಂಡದ್ದು

11ಬಳಿಕ ಅವರು ಅವಸರದಿಂದ ತಮ್ಮ ಚೀಲಗಳನ್ನು
ನೆಲದ ಮೇಲಿಟ್ಟು ಬಿಚ್ಚಿದರು. 12ಸೇವಕನು ಚೀಲಗಳನ್ನು
ಪರೀಕ್ಷಿಸಲು ಹಿರಿಯ ಸಹೋದರನಿಂದ ಆರಂಭಿಸಿ, ಕಿರಿ
ಯವನಾದ ಬೆನ್ಯಾಮೀನನ ಚೀಲದಲ್ಲಿ ಕಂಡು
ಕೊಂಡನು. 13ಸಹೋದರರು ತುಂಬ ದುಃಖದಿಂದ ತಮ್ಮ
ಬಟ್ಟೆಗಳನ್ನು ಹರಿದುಕೊಂಡು ತಮ್ಮ ಚೀಲಗಳನ್ನು ಮತ್ತೆ
ಕತ್ತೆಗಳ ಮೇಲೇರಿಸಿಕೊಂಡು ನಗರಕ್ಕೆ ಹಿಂತಿರುಗಿದರು.

14ಯೆಹೂದ ಮತ್ತು ಅವನ ಸಹೋದರರು
ಯೋಸೇಫನ ಮನೆಗೆ ಹಿಂತಿರುಗಿದಾಗ ಯೋಸೇಫನು
ಇನ್ನೂ ಅಲ್ಲೇ ಇದ್ದನು. ಸಹೋದರರು ನೆಲದ ಮೇಲೆ
ಬಿದ್ದು ತಲೆಬಾಗಿ ನಮಸ್ಕರಿಸಿದರು. 15ಯೋಸೇಫನು
ಅವರಿಗೆ, ‘‘ನೀವು ಹೀಗೇಕೆ ಮಾಡಿದಿರಿ? ನಾನು ಶಕುನ
ನೋಡಿ ರಹಸ್ಯಗಳನ್ನು ತಿಳಿದುಕೊಳ್ಳಬಲ್ಲೆನೆಂಬುದು
ನಿಮಗೆ ಗೊತ್ತಿರಲಿಲ್ಲವೇ?’’ ಎಂದು ಕೇಳಿದನು.

16ಯೆಹೂದನು, ‘‘ಸ್ವಾಮಿ, ನಾವು ಹೇಳುವಂಥದ್ದು
ಏನೂ ಇಲ್ಲ; ವಿವರಿಸಲು ಯಾವ ದಾರಿಯೂ ಇಲ್ಲ; ನಾವು
ತಪ್ಪಿತಸ್ಥರಲ್ಲವೆಂದು ತೋರಿಸಲು ಯಾವ ಮಾರ್ಗವೂ
ಇಲ್ಲ. ನಾವು ಮಾಡಿದ ಬೇರೊಂದು ಕಾರ್ಯದ ನಿಮಿತ್ತ
ದೇವರು ನಮ್ಮನ್ನು ತಪ್ಪಿತಸ್ಥರೆಂದು ನಿರ್ಣಯಿಸಿದ್ದಾನೆ.
ಆದ್ದರಿಂದ ನಾವೆಲ್ಲರೂ ಬೆನ್ಯಾಮೀನನೂ ನಿನಗೆ
ಗುಲಾಮರಾಗಿರುವೆವು’’ ಎಂದು ಹೇಳಿದನು.

17ಆದರೆ ಯೋಸೇಫನು, ‘‘ನಾನು ನಿಮ್ಮೆಲ್ಲರನ್ನು
ಗುಲಾಮರನ್ನಾಗಿ ಮಾಡುವುದಿಲ್ಲ; ಬಟ್ಟಲನ್ನು ಕದ್ದು
ಕೊಂಡವನು ಮಾತ್ರ ನನ್ನ ಗುಲಾಮನಾಗಿರಬೇಕು;
ಉಳಿದ ನೀವೆಲ್ಲರೂ ನಿಮ್ಮ ತಂದೆಯ ಬಳಿಗೆ ಸಮಾಧಾನ
ದಿಂದ ಹೋಗಬಹುದು’’ಎಂದು ಹೇಳಿದನು.

## ಬೆನ್ಯಾಮೀನನಿಗಾಗಿ ಯೆಹೂದನು ಬೇಡಿಕೊಂಡಿದ್ದು

18ಆಗ ಯೆಹೂದನು ಯೋಸೇಫನ ಬಳಿಗೆ ಹೋಗಿ,
‘‘ಸ್ವಾಮಿ, ತಮ್ಮೊಂದಿಗೆ ಬಿಚ್ಚುಮನಸ್ಸಿನಿಂದ ಮಾತ
ನಾಡಲು ದಯವಿಟ್ಟು ಅನುಮತಿಯಾಗಲಿ; ದಯವಿಟ್ಟು
ನನ್ನ ಮೇಲೆ ಕೋಪ ಮಾಡಬೇಡಿ. ನೀವು ಸ್ವತಃ ಫರೋಹ
ನಂತೆ ಇರುವಿರೆಂದು ನನಗೆ ತಿಳಿದಿದೆ. 19ನಾವು ಮೊದಲನೆ
ಸಲ ಬಂದಿದ್ದಾಗ, ನೀವು ನಮಗೆ, ‘ನಿಮಗೆ ತಂದೆ
ಯಾಗಲೀ, ತಮ್ಮನಾಗಲೀ ಇರುವನೇ?’ ಎಂದು ಕೇಳಿ
ದಿರಿ. 20ನಾವು ನಿಮಗೆ, ‘ನಮಗೆ ಒಬ್ಬ ತಂದೆಯಿದ್ದಾನೆ,
ಅವನು ವೃದ್ಧನಾಗಿದ್ದಾನೆ; ನಮಗೆ ಪ್ರಾಯದ ತಮ್ಮ
ನಿದ್ದಾನೆ, ನಮ್ಮ ತಂದೆಗೆ ತುಂಬ ವಯಸ್ಸಾಗಿದ್ದಾಗ ಅವನು
ಹುಟ್ಟಿದ್ದರಿಂದ ನಮ್ಮ ತಂದೆಯು ಅವನನ್ನು ಪ್ರೀತಿಸು
ತ್ತಾನೆ. ಆ ಕಿರಿಯ ಮಗನ ಸಹೋದರನು ಸತ್ತು
ಹೋದನು. ಆದ್ದರಿಂದ ಆ ತಾಯಿಯಲ್ಲಿ ಹುಟ್ಟಿದವರಲ್ಲಿ
ಇವನೊಬ್ಬನೇ ಉಳಿದಿದ್ದಾನೆ. ನಮ್ಮ ತಂದೆಯು ಅವನನ್ನು
ತುಂಬಾ ಪ್ರೀತಿಸುವನು’ ಎಂದು ಹೇಳಿದೆವು. 21ಬಳಿಕ
ನೀವು ನಮಗೆ, ‘ಹಾಗಾದರೆ ಆ ಸಹೋದರನನ್ನು ನನ್ನ
ಬಳಿಗೆ ಕರೆದುಕೊಂಡು ಬನ್ನಿ, ನಾನು ಅವನನ್ನು ನೋಡ
ಬೇಕು’ ಎಂದು ಹೇಳಿದಿರಿ. 22ನಾವು ನಿಮಗೆ ‘ಆ ಯುವ
ಕನು ಬರಲಾರನು. ಅವನು ತನ್ನ ತಂದೆಯನ್ನು ಬಿಟ್ಟು
ಬರಲಾಗದು. ಅವನ ತಂದೆ ಅವನನ್ನು ಕಳೆದುಕೊಂಡರೆ
ತುಂಬ ದುಃಖದಿಂದ ಸತ್ತುಹೋಗುವನು’ ಎಂದು ಹೇಳಿ
ದೆವು. 23ಆದರೆ ನೀವು ನಮಗೆ, ‘ನೀವು ಆ ಕಿರಿಯ
ಸಹೋದರನನ್ನು ಕರೆದುಕೊಂಡು ಬರಲೇಬೇಕು;
ಇಲ್ಲವಾದರೆ, ನಾನು ನಿಮಗೆ ದವಸಧಾನ್ಯಗಳನ್ನು ಮತ್ತೆ
ಮಾರುವುದಿಲ್ಲ’ ಎಂದು ಹೇಳಿದಿರಿ. 24ಆದ್ದರಿಂದ ನಾವು
ನಮ್ಮ ತಂದೆಯ ಬಳಿಗೆ ಹಿಂತಿರುಗಿ ಹೋಗಿ ನೀವು
ಹೇಳಿದ್ದನ್ನು ಅವನಿಗೆ ತಿಳಿಸಿದೆವು.

25‘‘ಸ್ವಲ ಸಮಯದ ನಂತರ ನಮ್ಮ ತಂದೆಯು, ಮತ್ತೆ
ಹೋಗಿ ಇನ್ನು ಸ್ವಲ್ಪ ಆಹಾರವನ್ನು ನಮಗಾಗಿ ಕೊಂಡು
ಕೊಂಡು ಬನ್ನಿ’ ಎಂದು ಹೇಳಿದನು. 26ಆದರೆ ನಾವು ನಮ್ಮ
ತಂದೆಗೆ, ‘ನಮ್ಮ ಕಿರಿಯ ತಮ್ಮನಿಲ್ಲದೆ ನಾವು ಹೋಗಲು
ಸಾಧ್ಯವಿಲ್ಲ. ನಮ್ಮ ಕಿರಿಯ ತಮ್ಮನನ್ನು ನೋಡುವ ತನಕ,
ನಮಗೆ ದವಸಧಾನ್ಯಗಳನ್ನು ಮಾರುವುದಿಲ್ಲ ಎಂದು ರಾಜ್ಯ
ಪಾಲರು ಹೇಳಿದ್ದಾರೆ’ ಎಂದು ಹೇಳಿದೆವು. 27ಆಗ ನಮ್ಮ
ತಂದೆಯು ನಮಗೆ, ‘ನನ್ನ ಹೆಂಡತಿಯಾದ ರಾಹೇಲಳು
ನನಗೆ ಇಬ್ಬರು ಗಂಡು ಮಕ್ಕಳನ್ನು ಕೊಟ್ಟಳು. 28ನಾನು
ಒಬ್ಬ ಮಗನನ್ನು ಕಳುಹಿಸಿಕೊಟ್ಟಾಗ, ಅವನು ಕ್ರೂರ
ಪ್ರಾಣಿಯಿಂದ ಕೊಲ್ಲಲ್ಪಟ್ಟನು; ಇಂದಿನ ತನಕ ನಾನು
ಅವನನ್ನು ನೋಡಲಿಲ್ಲ. 29ನೀವು ನನ್ನ ಮತ್ತೊಬ್ಬ ಮಗ
ನನ್ನು ನನ್ನ ಬಳಿಯಿಂದ ಕರೆದುಕೊಂಡು ಹೋಗುವಾಗ
ಅವನಿಗೆ ಏನಾದರೂ ಸಂಭವಿಸಿದರೆ, ನಾನು ದುಃಖ
ತಾಳಲಾರದೆ ಸತ್ತುಹೋಗುವೆನು’ ಎಂದು ಹೇಳಿದನು.
30ನಮ್ಮ ತಂದೆಗಂತೂ ಇವನನ್ನು ಕಂಡರೆ ಪ್ರಾಣಪ್ರೀತಿ.
ಆದ್ದರಿಂದ ನಮ್ಮ ಈ ಕಿರಿಯ ತಮ್ಮನಿಲ್ಲದೆ ಹೋದರೆ,
31ನಮ್ಮ ತಂದೆಯೂ ಆ ಕೂಡಲೇ ಸತ್ತುಹೋಗುವನು;
ನಮ್ಮ ತಂದೆ ದುಃಖದಿಂದ ಸಾಯಲು ನಾವೇ ಕಾರಣ
ರಾಗುವೆವು.

32‘‘ನಾನು ಈ ಯುವಕನ ಜವಾಬ್ದಾರಿಯನ್ನು ವಹಿಸಿ
ಕೊಂಡೆನು. ನಾನು ನನ್ನ ತಂದೆಗೆ, ‘ನಾನು ಇವನನ್ನು
ಹಿಂದಕ್ಕೆ ಕರೆದುಕೊಂಡು ಬರದಿದ್ದರೆ ನನ್ನ ಜೀವ
ಮಾನವೆಲ್ಲಾ ನೀನು ನನ್ನನ್ನು ದೂಷಿಸಬಹುದು’ ಎಂದು
ಹೇಳಿದೆನು. 33ಆದ್ದರಿಂದ ನಾನು ನಿಮ್ಮನ್ನು ಬೇಡಿ
ಕೊಳ್ಳುವುದೇನೆಂದರೆ, ಈ ಯುವಕನು ತನ್ನ ಸಹೋದರ
ರೊಂದಿಗೆ ಹಿಂತಿರುಗಿಹೋಗಲಿ; ನಾನು ಇಲ್ಲಿ ನಿಮಗೆ
ಗುಲಾಮನಾಗಿರುವೆನು. 34ನನ್ನ ಜೊತೆಯಲ್ಲಿ ಈ

ಹುಡುಗನಿಲ್ಲದೆ ನಾನು ನನ್ನ ತಂದೆಯ ಬಳಿಗೆ ಹಿಂತಿರುಗಿ
ಹೋಗಲು ಸಾಧ್ಯವಿಲ್ಲ. ನಮ್ಮ ತಂದೆಗೆ ಸಂಭವಿಸು
ವುದನ್ನು ನೋಡಲು ನನಗೆ ತುಂಬ ಭಯವಾಗಿದೆ''
ಎಂದು ಹೇಳಿದನು.

### ಯೋಸೇಫನು ತಾನು ಯಾರೆಂದು ಹೇಳುವನು

45 ಯೋಸೇಫನಿಗೆ ತಾಳಿಕೊಳ್ಳಲಾರದೆ,
''ಇಲ್ಲಿರುವ ಎಲ್ಲರನ್ನೂ ಹೊರಗೆ ಕಳುಹಿಸಿರಿ''
ಎಂದು ಅಪ್ಪಣೆಕೊಟ್ಟನು. ಅಲ್ಲಿದ್ದವರು ಹೊರಗೆ
ಹೋದರು; ಸಹೋದರರು ಮಾತ್ರ ಯೋಸೇಫನೊಡನೆ
ಇದ್ದರು. 2ಆಮೇಲೆ ಯೋಸೇಫನು ಗಟ್ಟಿಯಾಗಿ ಅತ್ತನು.
ಫರೋಹನ ಮನೆಯಲ್ಲಿದ್ದ ಈಜಿಪ್ಟಿನವರೆಲ್ಲ ಅದನ್ನು
ಕೇಳಿಸಿಕೊಂಡರು. 3ಯೋಸೇಫನು ತನ್ನ ಸಹೋದರರಿಗೆ,
''ನಾನು ನಿಮ್ಮ ತಮ್ಮನಾದ ಯೋಸೇಫ. ನನ್ನ ತಂದೆ
ಚೆನ್ನಾಗಿದ್ದಾನೆಯೇ?'' ಎಂದು ಕೇಳಿದನು. ಆದರೆ
ಸಹೋದರರು ಅವನಿಗೆ ಉತ್ತರಿಸಲಿಲ್ಲ. ಅವರಿಗೆ ಭಯ
ವಾಗಿತ್ತು ಮತ್ತು ಗಲಿಬಿಲಿಗೊಂಡಿದ್ದರು.

4ಯೋಸೇಫನು ಮತ್ತೆ ತನ್ನ ಸಹೋದರರಿಗೆ, ''ನನ್ನ
ಬಳಿಗೆ ಬನ್ನಿ. ನನ್ನ ಹತ್ತಿರ ಬನ್ನಿ ಎಂದು ಬೇಡಿಕೊಳ್ಳು
ತ್ತೇನೆ'' ಎಂದು ಹೇಳಿದನು. ಆದ್ದರಿಂದ ಸಹೋದರರು
ಯೋಸೇಫನ ಹತ್ತಿರ ಹೋದರು. ಯೋಸೇಫನು ಅವ
ರಿಗೆ, ''ನಾನು ನಿನ್ನ ತಮ್ಮನಾದ ಯೋಸೇಫ. ನೀವು
ಈಜಿಪ್ಟಿನವರಿಗೆ ಯಾವನನ್ನು ಗುಲಾಮನನ್ನಾಗಿ ಮಾರಿ
ದಿರೋ ಅವನೇ ನಾನು. 5ಈಗ ಚಿಂತಿಸಬೇಡಿ, ನೀವು
ಮಾಡಿದ್ದಕ್ಕೆ ದುಃಖವನ್ನೂ ಪಡಬೇಡಿ. ನಾನು ಇಲ್ಲಿಗೆ ಬರ
ಬೇಕೆಂಬುದು ದೇವರ ಯೋಜನೆಯಾಗಿತ್ತು. ನಾನು
ನಿಮ್ಮನ್ನು ರಕ್ಷಿಸಲು ಇಲ್ಲಿಗೆ ಬಂದಿದ್ದೇನೆ. 6ಈ ಭೀಕರ
ವಾದ ಬರಗಾಲವು ಆರಂಭವಾಗಿ ಈಗಾಗಲೇ ಎರಡು
ವರ್ಷಗಳಾಯಿತು. ಇನ್ನೂ ಐದು ವರ್ಷಗಳವರೆಗೆ ಬಿತ್ತನೆ
ಇರುವುದಿಲ್ಲ; ಸುಗ್ಗಿಯೂ ಇರುವುದಿಲ್ಲ. 7ಆದ್ದರಿಂದ ಈ
ದೇಶದಲ್ಲಿ ತನ್ನ ಜನರನ್ನು ಕಾಪಾಡಲು ದೇವರು ನನ್ನನ್ನು
ನಿಮಗಿಂತ ಮೊದಲೇ ಇಲ್ಲಿಗೆ ಕಳುಹಿಸಿದ್ದಾನೆ. 8ನನ್ನನ್ನು
ಇಲ್ಲಿಗೆ ಕಳುಹಿಸಿದ್ದು ನಿಮ್ಮ ತಪ್ಪಲ್ಲ. ಅದು ದೇವರ
ಯೋಜನೆ. ದೇವರು ನನ್ನನ್ನು ಫರೋಹನ ಅತ್ಯುನ್ನತ
ವಾದ ಅಧಿಕಾರಿಯನ್ನಾಗಿ ಮಾಡಿದ್ದಾನೆ. ನಾನು ಅವನ
ಮನೆಗೆಲ್ಲಾ ಮತ್ತು ಈಜಿಪ್ಟಿಗೆಲ್ಲಾ ರಾಜ್ಯಪಾಲನಾಗಿ
ದ್ದೇನೆ'' ಎಂದು ಹೇಳಿದನು.

### ಇಸ್ರೇಲರನ್ನು ಈಜಿಪ್ಟಿಗೆ ಆಮಂತ್ರಿಸಿದ್ದು

9ಬಳಿಕ ಯೋಸೇಫನು, ''ನನ್ನ ತಂದೆಯ ಬಳಿಗೆ ಬೇಗನೆ
ಹೋಗಿ ಅವನಿಗೆ, ನಿನ್ನ ಮಗನಾದ ಯೋಸೇಫನು ಈ
ಸಂದೇಶವನ್ನು ಕಳುಹಿಸಿದ್ದಾನೆ.'' ದೇವರು ನನ್ನನ್ನು
ಈಜಿಪ್ಟ್ ದೇಶಕ್ಕೆಲ್ಲಾ ರಾಜ್ಯಪಾಲನನ್ನಾಗಿ ಮಾಡಿದ್ದಾನೆ.
ತಡಮಾಡದೆ ನನ್ನ ಬಳಿಗೆ ಬಾ. 10ನೀನು ಗೋಷೆನ್
ಪ್ರಾಂತ್ಯದಲ್ಲಿ ನನ್ನೊಂದಿಗೆ ವಾಸಿಸುವೆ. ನೀನೂ ನಿನ್ನ
ಮಕ್ಕಳೂ ನಿನ್ನ ಮೊಮ್ಮಕ್ಕಳೂ ನಿಮ್ಮ ಎಲ್ಲಾ ಪಶುಗ
ಳೊಡನೆ ಇಲ್ಲಿ ನೆಲೆಸಬಹುದು. 11ಮುಂದಿನ ಐದು ವರ್ಷ
ಗಳ ಬರಗಾಲದಲ್ಲಿ ನಾನು ನಿಮ್ಮನ್ನು ಪೋಷಿಸುವೆನು.
ಆಗ ನಿನಗಾಗಲೀ ನಿನ್ನ ಕುಟುಂಬದವರಿಗಾಗಲೀ ಬಡತನ
ವಿರುವುದಿಲ್ಲ' ಎಂಬುದಾಗಿ ತಿಳಿಸಿರಿ'' ಎಂದು ಹೇಳಿದನು.

12ಯೋಸೇಫನು ತನ್ನ ಸಹೋದರರೊಂದಿಗೆ ಮಾತನ್ನು
ಮುಂದುವರಿಸಿ, ''ನಾನೇ ಯೋಸೇಫನೆಂದು ನಿಮಗೆ ಈಗ
ಗೊತ್ತಾಗಿದೆ; ನಿಮ್ಮ ತಮ್ಮನಾದ ಬೆನ್ಯಾಮೀನನಿಗೂ
ಗೊತ್ತಾಗಿದೆ. 13ಆದ್ದರಿಂದ ಈಜಿಪ್ಟಿನಲ್ಲಿರುವ ಮಹಾ
ಐಶ್ವರ್ಯವನ್ನೂ ನೀವು ಇಲ್ಲಿ ನೋಡಿರುವ ಪ್ರತಿ
ಯೊಂದನ್ನೂ ನನ್ನ ತಂದೆಗೆ ತಿಳಿಸಿ ಬೇಗನೆ ಅವನನ್ನು
ಕರೆದುಕೊಂಡು ಬನ್ನಿ'' ಎಂದು ಹೇಳಿದನು. 14ಆಮೇಲೆ
ಯೋಸೇಫನು ತನ್ನ ತಮ್ಮನಾದ ಬೆನ್ಯಾಮೀನನನ್ನು ಅಪ್ಪಿ
ಕೊಂಡು ಅತ್ತನು. ಬೆನ್ಯಾಮೀನನು ಸಹ ಅತ್ತನು.
15ಆಮೇಲೆ ಯೋಸೇಫನು ತನ್ನ ಎಲ್ಲಾ ಸಹೋದರರಿಗೂ
ಮುದ್ದಿಟ್ಟು ಅತ್ತನು. ಇದಾದ ಮೇಲೆ ಆ ಸಹೋದರರು
ಅವನೊಂದಿಗೆ ಮಾತಾಡತೊಡಗಿದರು.

16ಯೋಸೇಫನ ಸಹೋದರರು ಅವನ ಬಳಿಗೆ
ಬಂದಿರುವುದು ತಿಳಿದಾಗ ಫರೋಹನಿಗೂ ಅವನ ಮನೆ
ಯವರಿಗೂ ತುಂಬ ಸಂತೋಷವಾಯಿತು. 17ಆದ್ದರಿಂದ
ಫರೋಹನು ಯೋಸೇಫನಿಗೆ, ''ತಮಗೆ ಬೇಕಾದ ಎಲ್ಲಾ
ಆಹಾರವನ್ನು ತೆಗೆದುಕೊಂಡು ಕಾನಾನ್ ದೇಶಕ್ಕೆ ಹಿಂತಿ
ರುಗಿಹೋಗಿ 18ನಿನ್ನ ತಂದೆಯನ್ನೂ ತಮ್ಮ ಕುಟುಂಬ
ಗಳನ್ನೂ ನನ್ನ ಬಳಿಗೆ ಕರೆದುಕೊಂಡು ಬರಲಿ. ಅವರು
ಈಜಿಪ್ಟಿನ ಒಳ್ಳೆಯ ಪ್ರದೇಶದಲ್ಲಿ ವಾಸಿಸಲಿ. ಇಲ್ಲಿರುವ
ಉತ್ತಮವಾದ ಆಹಾರವನ್ನು ಅವರು ಊಟಮಾಡಲಿ,
19ಅವರು ನಮ್ಮ ಶ್ರೇಷ್ಠವಾದ ರಥಗಳನ್ನು ತೆಗೆದುಕೊಂಡು
ಕಾನಾನ್ ದೇಶಕ್ಕೆ ಹೋಗಿ ನಿನ್ನ ತಂದೆಯನ್ನೂ ಎಲ್ಲಾ
ಸ್ತ್ರೀಯರನ್ನೂ ಮಕ್ಕಳನ್ನೂ ಕರೆದುಕೊಂಡು ಬರಲಿ.
20ಅವರ ಸ್ವತ್ತುಗಳ ಬಗ್ಗೆ ಚಿಂತಿಸುವುದು ಬೇಡ; ಈಜಿಪ್ಟಿ
ನಲ್ಲಿ ನಮಗಿರುವ ಉತ್ತಮವಾದವುಗಳನ್ನು ಅವರಿಗೆ
ಕೊಡೋಣ'' ಎಂದು ಹೇಳಿದನು.

21ಅಂತೆಯೇ ಇಸ್ರೇಲನ ಮಕ್ಕಳು ಮಾಡಿದರು.
ಫರೋಹನು ಹೇಳಿದಂತೆಯೇ ಯೋಸೇಫನು ತನ್ನ
ಸಹೋದರರಿಗೆ ಒಳ್ಳೆಯ ರಥಗಳನ್ನೂ ಪ್ರಯಾಣಕ್ಕೆ
ಬೇಕಾಗುವಷ್ಟು ಆಹಾರವನ್ನೂ ಕೊಟ್ಟನು.
22ಯೋಸೇಫನು ಪ್ರತಿಯೊಬ್ಬ ಸಹೋದರನಿಗೂ
ಒಂದೊಂದು ಜೊತೆ ಸುಂದರವಾದ ಉಡುಪುಗಳನ್ನು
ಕೊಟ್ಟನು. ಆದರೆ ಬೆನ್ಯಾಮೀನನಿಗೆ ಮಾತ್ರ ಐದು ಜೊತೆ
ಸುಂದರವಾದ ಉಡುಪುಗಳನ್ನೂ ಮುನ್ನೂರು ಬೆಳ್ಳಿಯ

ನಾಣ್ಯಗಳನ್ನೂ ಕೊಟ್ಟನು. [23]ಯೋಸೇಫನು ತನ್ನ
ತಂದೆಗೂ ಉಡುಗೊರೆಗಳನ್ನು ಕಳುಹಿಸಿದನು. ಅವನು
ಈಜಿಪ್ಟಿನ ಶ್ರೇಷ್ಠವಾದ ವಸ್ತುಗಳನ್ನು ಹತ್ತು ಕತ್ತೆಗಳ ಮೇಲೆ
ಕಳುಹಿಸಿದನು. ತನ್ನ ತಂದೆಯ ಮರುಪ್ರಯಾಣಕ್ಕೆ
ಬೇಕಾದ ಕಾಳು, ರೊಟ್ಟಿ ಮತ್ತು ಇತರ ಆಹಾರ ಪದಾರ್ಥ
ಗಳನ್ನೂ ಹತ್ತು ಹೆಣ್ಣುಕತ್ತೆಗಳ ಮೇಲೆ ಹೊರಿಸಿ ಕಳುಹಿ
ಸಿದನು. [24]ಅವರು ಹೊರಡುವಾಗ ಯೋಸೇಫನು,
‘‘ನೇರವಾಗಿ ಮನೆಗೆ ಹೋಗಿ. ದಾರಿಯಲ್ಲಿ ಜಗಳ ಮಾಡ
ಬೇಡಿ’’ ಎಂದು ಹೇಳಿದನು.

[25]ಆದ್ದರಿಂದ ಸಹೋದರರು ಈಜಿಪ್ಟನ್ನು ಬಿಟ್ಟು ತನ್ನ
ತಂದೆಯಿರುವ ಕಾನಾನ್ ದೇಶಕ್ಕೆ ಹೋದರು.
[26]ಸಹೋದರರು ತಮ್ಮ ತಂದೆಗೆ, ‘‘ಅಪ್ಪಾ, ಯೋಸೇಫನು
ಇನ್ನೂ ಬದುಕಿದ್ದಾನೆ; ಅವನು ಈಜಿಪ್ಟ್ ದೇಶಕ್ಕೆಲ್ಲಾ
ರಾಜ್ಯಪಾಲನಾಗಿದ್ದಾನೆ’’ ಎಂದು ಹೇಳಿದರು.

ಅವರ ತಂದೆಗೆ ಆಶ್ಚರ್ಯವಾಯಿತು. ಆತನು ಅವರನ್ನು
ನಂಬಲಿಲ್ಲ. [27]ಆದರೆ ಯೋಸೇಫನು ತಮಗೆ ಹೇಳಿದ್ದೆಲ್ಲ
ವನ್ನು ಸಹೋದರರು ತಮ್ಮ ತಂದೆಗೆ ಹೇಳಿದರು. ಆಮೇಲೆ
ತನ್ನನ್ನು ಈಜಿಪ್ಟಿಗೆ ಕರೆದುಕೊಂಡು ಬರಲು
ಯೋಸೇಫನು ಕಳುಹಿಸಿದ್ದ ರಥಗಳನ್ನು ಯಾಕೋಬನು
ನೋಡಿ ಉಲ್ಲಾಸಪಟ್ಟನು. [28]ಇಸ್ರೇಲನು, ‘‘ಈಗ ನಾನು
ನಿಮ್ಮನ್ನು ನಂಬುತ್ತೇನೆ. ನನ್ನ ಮಗನಾದ ಯೋಸೇಫನು
ಇನ್ನೂ ಬದುಕಿದ್ದಾನೆ. ನಾನು ಸಾಯುವ ಮೊದಲು
ಅವನನ್ನು ನೋಡುತ್ತೇನೆ’’ ಎಂದು ಹೇಳಿದನು.

## ದೇವರು ಇಸ್ರೇಲನಿಗೆ ಕೊಟ್ಟ ಭರವಸೆ

46 ಆದ್ದರಿಂದ ಇಸ್ರೇಲನು ಈಜಿಪ್ಟಿಗೆ ಪ್ರಯಾಣ
ಬೆಳೆಸಿದನು. ಅವನು ಬೇರ್ಷೆಬಕ್ಕೆ ಹೋಗಿ ತನ್ನ
ತಂದೆಯಾದ ಇಸಾಕನ ದೇವರನ್ನು ಆರಾಧಿಸಿ ಯಜ್ಞ
ಗಳನ್ನು ಅರ್ಪಿಸಿದನು. [2]ಆ ರಾತ್ರಿ ದೇವರು ಕನಸಿನಲ್ಲಿ
ಅವನೊಂದಿಗೆ ಮಾತನಾಡಿದನು. ದೇವರು ಅವನನ್ನು,
‘‘ಯಾಕೋಬನೇ, ಯಾಕೋಬನೇ’’ ಎಂದು ಕರೆದನು.
ಅದಕ್ಕೆ ಇಸ್ರೇಲನು, ‘‘ಇಗೋ, ಇದ್ದೇನೆ’’ ಎಂದು
ಉತ್ತರಕೊಟ್ಟನು.

[3]ದೇವರು ಅವನಿಗೆ, ‘‘ನಾನೇ ದೇವರು, ನಾನೇ ನಿನ್ನ
ತಂದೆಯ ದೇವರು. ನೀನು ಈಜಿಪ್ಟಿಗೆ ಹೋಗಲು ಹೆದರ
ಬೇಡ. ಈಜಿಪ್ಟಿನಲ್ಲಿ ನಿನ್ನನ್ನು ದೊಡ್ಡ ಜನಾಂಗವನ್ನಾಗಿ
ಮಾಡುವೆ. [4]ನಾನು ನಿನ್ನೊಂದಿಗೆ ಈಜಿಪ್ಟಿಗೆ ಬರುವೆನು.
ಬಳಿಕ ನಾನೇ ನಿನ್ನನ್ನು ಮತ್ತೆ ಈಜಿಪ್ಟಿನಿಂದ ಕರೆದು
ಕೊಂಡು ಬರುವೆನು. ನೀನು ಈಜಿಪ್ಟಿನಲ್ಲಿ ಮರಣ
ಹೊಂದಿದರೂ ಯೋಸೇಫನು ನಿನ್ನ ಸಂಗಡವಿರುವನು.
ನೀನು ಸತ್ತಾಗ ಅವನು ತನ್ನ ಕೈಗಳಿಂದ ನಿನ್ನ ಕಣ್ಣುಗಳನ್ನು
ಮುಚ್ಚುವನು’’ ಎಂದು ಹೇಳಿದನು.

## ಈಜಿಪ್ಟಿಗೆ ಇಸ್ರೇಲನ ಪ್ರಯಾಣ

[5]ಆಮೇಲೆ ಯಾಕೋಬನು ಬೇರ್ಷೆಬವನ್ನು ಬಿಟ್ಟು
ಈಜಿಪ್ಟಿಗೆ ಪ್ರಯಾಣ ಮಾಡಿದನು. ಇಸ್ರೇಲನ ಗಂಡು
ಮಕ್ಕಳು ತಮ್ಮ ತಂದೆಯನ್ನೂ ತಮ್ಮ ಹೆಂಡತಿಯರನ್ನೂ
ತಮ್ಮ ಎಲ್ಲಾ ಮಕ್ಕಳನ್ನೂ ಕರೆದುಕೊಂಡು ಹೋದರು.
ಫರೋಹನು ಕಳುಹಿಸಿದ್ದ ರಥಗಳಲ್ಲಿ ಅವರು ಪ್ರಯಾಣ
ಮಾಡಿದರು. [6]ಇದಲ್ಲದೆ ಅವರು ತಮ್ಮ ದನಕರುಗಳನ್ನೂ
ಕಾನಾನ್ ದೇಶದಲ್ಲಿ ತಾವು ಹೊಂದಿದ್ದ ಪ್ರತಿಯೊಂದನ್ನೂ
ತೆಗೆದುಕೊಂಡು ಹೋದರು. ಹೀಗೆ ಇಸ್ರೇಲನು ತನ್ನ
ಎಲ್ಲಾ ಮಕ್ಕಳೊಂದಿಗೆ ಮತ್ತು ತನ್ನ ಕುಟುಂಬದೊಂದಿಗೆ
ಈಜಿಪ್ಟಿಗೆ ಹೋದನು. [7]ಅವನ ಜೊತೆಯಲ್ಲಿ ಅವನ
ಗಂಡು ಮಕ್ಕಳು, ಹೆಣ್ಣು ಮಕ್ಕಳು ಮತ್ತು ಮೊಮ್ಮಕ್ಕಳು
ಇದ್ದರು. ಅವನ ಸಂಸಾರದವರೆಲ್ಲ ಅವನ ಜೊತೆ ಈಜಿಪ್ಟಿಗೆ
ಹೋದರು.

## ಯಾಕೋಬನ ಕುಟುಂಬ

[8]ಇಸ್ರೇಲನ ಸಂಗಡ ಈಜಿಪ್ಟಿಗೆ ಹೋದ ಅವನ ಮಕ್ಕಳ
ಮತ್ತು ಕುಟುಂಬದವರ ಹೆಸರುಗಳು ಇಂತಿವೆ:

ಯಾಕೋಬನ ಮೊದಲನೆಯ ಮಗ ರೂಬೇನನು.
[9]ರೂಬೇನನ ಮಕ್ಕಳು: ಹನೋಕ್, ಫಲ್ಲೂ, ಹೆಚ್ರೋನ್
ಮತ್ತು ಕರ್ಮೀ.

[10]ಸಿಮೆಯೋನನ ಮಕ್ಕಳು: ಯೆಮೂವೇಲ್,
ಯಾಮೀನ್, ಓಹದ್, ಯಾಕೀನ್, ಚೋಹರ್ ಮತ್ತು
ಸೌಲನು (ಸೌಲನು ಕಾನಾನ್ಯ ಸ್ತ್ರೀಯಲ್ಲಿ ಹುಟ್ಟಿದವನು.)

[11]ಲೇವಿಯ ಮಕ್ಕಳು: ಗೇರ್ಷೋನ್, ಕೆಹಾತ್ ಮತ್ತು
ಮೆರಾರೀ.

[12]ಯೆಹೂದನ ಮಕ್ಕಳು: ಏರ್, ಓನಾನ್, ಶೇಲಾಹ,
ಪೆರೆಚ್ ಮತ್ತು ಜೆರಹ. (ಏರ್ ಮತ್ತು ಓನಾನ್
ಕಾನಾನಿನಲ್ಲಿ ಇರುವಾಗಲೇ ಸತ್ತು ಹೋದರು.)

ಪೆರೆಚನ ಮಕ್ಕಳು: ಹೆಚ್ರೋನ್ ಮತ್ತು ಹಾಮೂಲ್.

[13]ಇಸ್ಸಾಕಾರನ ಮಕ್ಕಳು: ತೋಲಾ, ಪುವ್ವಾ, ಯೋಬ್,
ಮತ್ತು ಶಿಮ್ರೋನ್.

[14]ಜೆಬುಲೂನ್ ಮಕ್ಕಳು; ಸೆರೆದ್, ಏಲೋನ್,
ಯಹ್ಲೇಲ್.

[15]ರೂಬೇನ್, ಸಿಮೆಯೋನ್, ಲೇವಿ, ಯೆಹೂದ,
ಇಸ್ಸಾಕಾರ್ ಮತ್ತು ಜೆಬುಲೂನ್. ಇವರು
ಯಾಕೋಬನ ಹೆಂಡತಿಯಾದ ಲೇಯಾಳ ಮಕ್ಕಳು.
ಲೇಯಾಳು ಆ ಮಕ್ಕಳಿಗೆ ಪದ್ದನ್‌ಅರಾಮಿನಲ್ಲಿ ಜನ್ಮ
ಕೊಟ್ಟಳು. ಅಲ್ಲಿ ಅವಳ ಮಗಳಾದ ದೀನ ಸಹ ಜನಿಸಿದಳು.
ಈ ಕುಟುಂಬದಲ್ಲಿ ಮೂವತ್ಮೂರು ಮಂದಿ ಇದ್ದರು.

[16]ಗಾದನ ಮಕ್ಕಳು: ಚಿಫ್ಯೋನ್, ಹಗ್ಗೀ, ಶೂನೀ,
ಎಚ್ಬೋನ್, ಏರೀ, ಅರೋದೀ ಮತ್ತು ಅರೇಲೀ.

[17]ಆಶೇರನ ಮಕ್ಕಳು: ಇಮ್ನಾ, ಇಷ್ವಾ, ಇಷ್ವೀ, ಬೆರೀಗಾ
ಮತ್ತು ಇವರ ತಂಗಿಯಾದ ಸೆರಹ.

ಬೆರೀಗನ ಗಂಡು ಮಕ್ಕಳು: ಹೆಬೆರ್ ಮತ್ತು
ಮಲ್ಕೀಯೇಲ್.

[18]ಲಾಬಾನನು ತನ್ನ ಮಗಳಾದ ಲೇಯಾಳಿಗೆ ಜಿಲ್ಪ
ಎಂಬ ದಾಸಿಯನ್ನು ಕೊಟ್ಟಿದ್ದನು. ಲೇಯಾಳು ಜಿಲ್ಪಳನ್ನು
ಯಾಕೋಬನಿಗೆ ಕೊಟ್ಟಿದ್ದಳು. ಜಿಲ್ಪಳ ಕುಟುಂಬದಲ್ಲಿ
ಒಟ್ಟು ಹದಿನಾರು ಮಂದಿಯಿದ್ದರು.

[19]ಬೆನ್ಯಾಮೀನನು ಸಹ ಯಾಕೋಬನೊಂದಿಗಿದ್ದನು.
ಬೆನ್ಯಾಮೀನನು ಯಾಕೋಬ ಮತ್ತು ರಾಹೇಲಳ
ಮಗನು. (ಯೋಸೇಫನು ಸಹ ರಾಹೇಲಳ ಮಗ. ಆದರೆ
ಯೋಸೇಫನು ಈಗಾಗಲೇ ಈಜಿಪ್ಟಿನಲ್ಲಿದ್ದನು.)

[20]ಈಜಿಪ್ಟಿನಲ್ಲಿ ಯೋಸೇಫನಿಗೆ ಇಬ್ಬರು ಗಂಡು
ಮಕ್ಕಳಿದ್ದರು. ಅವರು ಯಾರೆಂದರೆ: ಮನಸ್ಸೆ ಮತ್ತು
ಎಫ್ರಾಯೀಮ್. (ಯೋಸೇಫನ ಹೆಂಡತಿ 'ಅಸನತ್'
ಈಕೆ ಓನ್ ಪಟ್ಟಣದ ಆಚಾರ್ಯನಾಗಿದ್ದ ಪೋಟೀಫರನ
ಮಗಳು.)

[21]ಬೆನ್ಯಾಮೀನನ ಗಂಡುಮಕ್ಕಳು: ಬೆಳಾ, ಬೆಕೆರ್
ಅಶ್ಬೇಲ್, ಗೇರಾ, ನಾಮಾನ್.

ಎಹೀರೋಷ್,ಮುಪ್ಪೀಮ್, ಹುಪ್ಪೀಮ್ ಮತ್ತು
ಆರ್ದ್.

[22]ಇವರೆಲ್ಲರು ಯಾಕೋಬನ ಹೆಂಡತಿಯಾದ
ರಾಹೇಲಳ ಕುಟುಂಬದವರು. ಈ ಕುಟುಂಬದಲ್ಲಿ ಒಟ್ಟು
ಹದಿನಾಲ್ಕು ಮಂದಿಯಿದ್ದರು.

[23]ದಾನನ ಗಂಡುಮಕ್ಕಳು: ಹುಶೀಮ್.

[24]ನಫ್ತಾಲಿಯನ ಗಂಡುಮಕ್ಕಳು: ಯಹೇಲ್, ಗೂನೀ,
ಯೇಚೆರ್ ಮತ್ತು ಶಿಲ್ಲೇಮ್.

[25]ಇವರೆಲ್ಲ ಬಿಲ್ಹಳ ಕುಟುಂಬದವರು. (ಲಾಬಾನನು
ತನ್ನ ಮಗಳಾದ ರಾಹೇಲಳಿಗೆ ಕೊಟ್ಟ ದಾಸಿಯೇ ಬಿಲ್ಹ.
ರಾಹೇಲಳು ಈ ದಾಸಿಯನ್ನು ಯಾಕೋಬನಿಗೆ ಕೊಟ್ಟಿ
ದ್ದಳು.)ಈ ಕುಟುಂಬದಲ್ಲಿ ಒಟ್ಟು ಏಳು ಮಂದಿಯಿದ್ದರು.

[26]ಯಾಕೋಬನಿಂದಲೇ ಹುಟ್ಟಿದ ಅರವತ್ತಾರು ಮಂದಿ
ಈಜಿಪ್ಟಿಗೆ ಹೋದರು. (ಯಾಕೋಬನ ಮಕ್ಕಳ ಹೆಂಡತಿ
ಯರನ್ನು ಇಲ್ಲಿ ಸೇರಿಸಿಲ್ಲ.) [27]ಅಲ್ಲಿ ಯೋಸೇಫನ ಇಬ್ಬರು
ಗಂಡುಮಕ್ಕಳು ಸಹ ಇದ್ದರು. ಅವರು ಈಜಿಪ್ಟಿನಲ್ಲಿ
ಹುಟ್ಟಿದವರು. ಆದ್ದರಿಂದ ಈಜಿಪ್ಟಿಗೆ ಬಂದ
ಯಾಕೋಬನ ಕುಟುಂಬದವರು ಒಟ್ಟು ಎಪ್ಪತ್ತು ಮಂದಿ.

### ಈಜಿಪ್ಟಿಗೆ ಇಸ್ರೇಲನ ಆಗಮನ

[28]ಯಾಕೋಬನು ಮೊದಲು ಯೆಹೂದನನ್ನು
ಯೋಸೇಫನ ಬಳಿಗೆ ಕಳುಹಿಸಿದನು. ಗೋಷೆನ್ ಪ್ರಾಂತ್ಯ
ದಲ್ಲಿ ಯೆಹೂದನು ಯೋಸೇಫನ ಬಳಿಗೆ ಹೋದನು.
ಆಮೇಲೆ ಯಾಕೋಬ ಮತ್ತು ಅವನ ಮಕ್ಕಳು ಆ
ಪ್ರಾಂತ್ಯಕ್ಕೆ ಬಂದರು. [29]ತನ್ನ ತಂದೆಯು ಸಮೀಪಿಸುತ್ತಿರು
ವುದು ಯೋಸೇಫನಿಗೆ ತಿಳಿಯಿತು. ಆದ್ದರಿಂದ ಅವನು
ತನ್ನ ತಂದೆಯಾದ ಇಸ್ರೇಲನನ್ನು ಗೋಷೆನಿನಲ್ಲಿ ಭೇಟಿ
ಯಾಗಲು ತನ್ನ ರಥವನ್ನು ಸಿದ್ಧಪಡಿಸಿಕೊಂಡು
ಹೋದನು. ಯೋಸೇಫನು ತನ್ನ ತಂದೆಯನ್ನು ಕಂಡಾಗ
ಅವನನ್ನು ಅಪ್ಪಿಕೊಂಡು ಬಹಳ ಹೊತ್ತಿನ ತನಕ ಅತ್ತನು.

[30]ಆಗ ಇಸ್ರೇಲನು ಯೋಸೇಫನಿಗೆ, ''ನಾನು ನಿನ್ನ
ಮುಖವನ್ನು ಕಣ್ಣಾರೆ ಕಂಡದ್ದರಿಂದ ನೀನು ಬದುಕಿರು
ವುದು ನನಗೆ ನಿಶ್ಚಯವಾಯಿತು. ನಾನು ಈಗ ಸಮಾಧಾನ
ದಿಂದ ಸಾಯುವೆನು'' ಎಂದು ಹೇಳಿದನು.

[31]ಯೋಸೇಫನು ತನ್ನ ಸಹೋದರರಿಗೂ ತನ್ನ ತಂದೆಯ
ಕುಟುಂಬದವರಿಗೂ, ''ನಾನು ಫರೋಹನ ಬಳಿಗೆ
ಹೋಗಿ, 'ನನ್ನ ಸಹೋದರರು ಮತ್ತು ನನ್ನ ತಂದೆಯ
ಕುಟುಂಬದವರು ಕಾನಾನ್ ದೇಶವನ್ನು ಬಿಟ್ಟು ನನ್ನ
ಬಳಿಗೆ ಬಂದಿದ್ದಾರೆ. [32]ಈ ಕುಟುಂಬವು ಕುರುಬರ
ಕುಟುಂಬ. ಇವರು ಯಾವಾಗಲೂ ದನಕರುಗಳ ಮತ್ತು
ಆಡುಕುರಿಗಳ ಮಂದೆಗಳನ್ನು ಸಾಕುವವರು. ಇವರು
ತಮ್ಮ ಎಲ್ಲಾ ಪಶುಗಳನ್ನು ಮತ್ತು ತಾವು ಹೊಂದಿರುವ
ಪ್ರತಿಯೊಂದನ್ನು ತಮ್ಮೊಂದಿಗೆ ತಂದಿದ್ದಾರೆ' ಎಂದು
ತಿಳಿಸುತ್ತೇನೆ. [33]ಫರೋಹನು ನಿಮ್ಮನ್ನು ಕರೆಯಿಸಿ, 'ನಿಮ್ಮ
ಉದ್ಯೋಗವೇನು?' ಎಂದು ಕೇಳುತ್ತಾನೆ. [34]ನೀವು
ಅವನಿಗೆ, 'ನಾವು ಕುರುಬರು. ನಮ್ಮ ಜೀವಮಾನವೆಲ್ಲಾ
ನಾವು ಪಶುಗಳನ್ನು ಸಾಕುವುದರ ಮೂಲಕ ಜೀವನ
ಮಾಡಿದೆವು. ನಮಗಿಂತ ಮೊದಲು ನಮ್ಮ ಪೂರ್ವಿಕರು
ಸಹ ಇದೇ ರೀತಿ ಜೀವಿಸಿದರು' ಎಂದು ಹೇಳಿರಿ. ಆಗ
ಅವನು ಗೋಷೆನ್ ಪ್ರಾಂತ್ಯದಲ್ಲಿ ವಾಸಿಸಲು ನಿಮಗೆ
ಅವಕಾಶ ಮಾಡಿಕೊಡುತ್ತಾನೆ. ಈಜಿಪ್ಟಿನ ಜನರು
ಕುರುಬರನ್ನು ಇಷ್ಟಪಡುವುದಿಲ್ಲ. ಆದ್ದರಿಂದ ನೀವು
ಗೋಷೆನಿನಲ್ಲಿ ವಾಸಿಸುವುದು ಒಳ್ಳೆಯದು'' ಎಂದು
ಹೇಳಿದನು.

### ಇಸ್ರೇಲನು ಗೋಷೆನಿನಲ್ಲಿ ನೆಲೆಸಿದ್ದು

47 ಯೋಸೇಫನು ಫರೋಹನ ಬಳಿಗೆ ಹೋಗಿ,
''ನನ್ನ ತಂದೆಯೂ ನನ್ನ ಸಹೋದರರೂ ಅವ
ರೆಲ್ಲರ ಕುಟುಂಬಗಳವರೂ ಇಲ್ಲಿಗೆ ಬಂದಿದ್ದಾರೆ. ಅವರು
ತಮ್ಮ ಎಲ್ಲಾ ಪಶುಗಳನ್ನು ಕಾನಾನಿನಲ್ಲಿ ಪಡೆದಿದ್ದ ಪ್ರತಿ
ಯೊಂದನ್ನೂ ತೆಗೆದುಕೊಂಡು ಬಂದಿದ್ದಾರೆ. ಈಗ ಅವರು
ಗೋಷೆನ್ ಪ್ರಾಂತ್ಯದಲ್ಲಿ ಇದ್ದಾರೆ'' ಎಂದು ಹೇಳಿದನು.
[2]ಯೋಸೇಫನು ತನ್ನ ಸಹೋದರರಲ್ಲಿ ಐದು ಮಂದಿ
ಯನ್ನು ಆರಿಸಿಕೊಂಡು ಫರೋಹನ ಬಳಿಗೆ ಅವರನ್ನು
ಕರೆದುಕೊಂಡು ಹೋದನು.

[3]ಫರೋಹನು ಸಹೋದರರಿಗೆ, ''ನಿಮ್ಮ ಉದ್ಯೋಗ
ವೇನು?'' ಎಂದು ಕೇಳಿದನು.
ಸಹೋದರರು ಫರೋಹನಿಗೆ,''ಸ್ವಾಮೀ, ನಾವು ಕುರು
ಬರು. ನಮ್ಮ ಪೂರ್ವಿಕರು ನಮಗಿಂತ ಮೊದಲೇ ಕುರುಬ
ರಾಗಿದ್ದರು'' ಎಂದು ಹೇಳಿದರು. [4]ಅವರು ಫರೋಹ
ನಿಗೆ,''ಬರಗಾಲವು ಕಾನಾನ್ ದೇಶದಲ್ಲಿ ತುಂಬ ಘೋರ
ವಾಗಿದೆ. ಯಾವ ಹೊಲದಲ್ಲಿಯೂ ನಮ್ಮ ಪಶುಗಳಿಗೂ
ಹುಲ್ಲು ಉಳಿದಿಲ್ಲ. ಆದ್ದರಿಂದ ನಾವು ಈ ದೇಶದಲ್ಲಿ
ವಾಸಿಸಲು ಬಂದಿದ್ದೇವೆ. ನಾವು ಗೋಷೆನ್ ಪ್ರಾಂತ್ಯದಲ್ಲಿ
ವಾಸಿಸಲು ದಯವಿಟ್ಟು ನಮಗೆ ಅವಕಾಶ ಮಾಡಿಕೊಡ
ಬೇಕೆಂದು ಕೇಳಿಕೊಳ್ಳುತ್ತಿದ್ದೇವೆ'' ಎಂದು ಹೇಳಿದರು.
[5]ಆಗ ಫರೋಹನು ಯೋಸೇಫನಿಗೆ, ''ನಿನ್ನ
ತಂದೆಯೂ ನಿನ್ನ ಸಹೋದರರೂ ನಿನ್ನ ಬಳಿಗೆ ಬಂದಿ
ದ್ದಾರೆ. [6]ಅವರ ವಾಸಕ್ಕಾಗಿ ಈಜಿಪ್ಟಿನಲ್ಲಿ ಯಾವ ಸ್ಥಳವ
ನ್ನಾದರೂ ಆರಿಸಿಕೊಳ್ಳಬಹುದು. ನಿನ್ನ ತಂದೆಯೂ ನಿನ್ನ
ಸಹೋದರರೂ ವಾಸವಾಗಿರಲು ಉತ್ತಮವಾದ ಪ್ರದೇಶ
ವನ್ನು ಕೊಡು. ಅವರು ಗೋಷೆನ್ ಪ್ರಾಂತ್ಯದಲ್ಲಿ ವಾಸಿ
ಸಲಿ. ಅವರು ನಿಪುಣರಾದ ಕುರುಬರಾಗಿದ್ದರೆ, ಅವರು
ನನ್ನ ದನಕರುಗಳನ್ನು ಸಹ ನೋಡಿಕೊಳ್ಳಬಹುದು''
ಎಂದು ಹೇಳಿದನು. [7]ಆಗ ಯೋಸೇಫನು ತನ್ನ ತಂದೆ
ಯನ್ನು ಫರೋಹನ ಸನ್ನಿಧಿಗೆ ಕರೆಯಿಸಿದನು.
ಯಾಕೋಬನು ಫರೋಹನನ್ನು ಆಶೀರ್ವದಿಸಿದನು.
[8]ಆಗ ಫರೋಹನು ಯಾಕೋಬನಿಗೆ, ''ನಿನಗೆ ಎಷ್ಟು
ವಯಸ್ಸಾಗಿದೆ?'' ಎಂದು ಹೇಳಿದನು.
[9]ಯಾಕೋಬನು ಫರೋಹನಿಗೆ, ''ನಾನು ನನ್ನ ಅಲ್ಪ
ಕಾಲದ ಜೀವನದಲ್ಲಿ ಅನೇಕ ತೊಂದರೆಗಳನ್ನು ಅನುಭ
ವಿಸಿದೆನು. ಈಗ ನನಗೆ ನೂರಮೂವತ್ತು ವರ್ಷ. ನನ್ನ
ತಂದೆಯೂ ಅವನ ಪೂರ್ವಿಕರು ನನಗಿಂತ ಹೆಚ್ಚು ವರ್ಷ
ಜೀವಿಸಿದರು'' ಎಂದು ಹೇಳಿದನು. [10]ಯಾಕೋಬನು
ಫರೋಹನನ್ನು ಆಶೀರ್ವದಿಸಿದ ಬಳಿಕ ಫರೋಹನ
ಸನ್ನಿಧಿಯಿಂದ ಹೊರಟುಹೋದನು. [11]ಫರೋಹನು
ಹೇಳಿದಂತೆಯೇ ಯೋಸೇಫನು ಮಾಡಿದನು. ಅವನು
ತನ್ನ ತಂದೆಗೂ ಸಹೋದರರಿಗೂ ಈಜಿಪ್ಟಿನಲ್ಲಿ ವಾಸಿಸಲು
ಉತ್ತಮವಾದ ಪ್ರದೇಶವನ್ನು ಕೊಟ್ಟನು. ಅದು ರಮ್ಸೇಸ್
ಪಟ್ಟಣದ ಸಮೀಪದಲ್ಲಿತ್ತು. [12]ಯೋಸೇಫನು ತನ್ನ
ತಂದೆಗೂ ತನ್ನ ಸಹೋದರರಿಗೂ ಮತ್ತು ಅಲ್ಲಿನ ಎಲ್ಲಾ
ಜನರಿಗೂ ಬೇಕಾಗಿದ್ದ ಆಹಾರವನ್ನು ಕೊಟ್ಟನು.

## ಯೋಸೇಫನು ಫರೋಹನಿಗೆ ಭೂಮಿಯನ್ನು ಕೊಂಡುಕೊಂಡದ್ದು

[13]ಬರಗಾಲವು ಹೆಚ್ಚು ಭೀಕರವಾಯಿತು. ದೇಶದಲ್ಲಿ
ಎಲ್ಲಿಯೂ ಆಹಾರ ಇರಲಿಲ್ಲ. ಈಜಿಪ್ಟ್ ಮತ್ತು ಕಾನಾನ್
ದೇಶಗಳು ಕೆಟ್ಟಕಾಲದಿಂದ ಬಡದೇಶಗಳಾದವು.
[14]ಈಜಿಪ್ಟ್ ಮತ್ತು ಕಾನಾನ್ ದೇಶಗಳ ಜನರು ಧಾನ್ಯ
ಗಳನ್ನು ಕೊಂಡುಕೊಂಡರು. ಯೋಸೇಫನು ಹಣವನ್ನು
ಉಳಿಸಿ ಫರೋಹನ ಭಂಡಾರಕ್ಕೆ ಸೇರಿಸಿದನು. [15]ಸ್ವಲ್ಪ
ಸಮಯದ ನಂತರ, ಈಜಿಪ್ಟ್ ಮತ್ತು ಕಾನಾನ್ ದೇಶ
ಗಳಲ್ಲಿದ್ದ ಜನರಲ್ಲಿ ಹಣವು ಉಳಿದಿರಲಿಲ್ಲ. ಆದ್ದರಿಂದ
ಈಜಿಪ್ಟಿನ ಜನರು ಯೋಸೇಫನ ಬಳಿಗೆ ಹೋಗಿ, ''ದಯ
ವಿಟ್ಟು ನಮಗೆ ಆಹಾರವನ್ನು ಕೊಡು. ನಮ್ಮ ಹಣವೆಲ್ಲ
ಮುಗಿದುಹೋಗಿದೆ. ನಾವು ಊಟ ಮಾಡದಿದ್ದರೆ
ನಿನ್ನೆದುರಿನಲ್ಲೇ ಸಾಯುತ್ತೇವೆ'' ಎಂದು ಹೇಳಿದರು.
[16]ಅದಕ್ಕೆ ಯೋಸೇಫನು, ''ನಿಮ್ಮ ದನಕರುಗಳನ್ನು
ನನಗೆ ಕೊಡಿರಿ, ನಾನು ನಿಮಗೆ ಆಹಾರವನ್ನು ಕೊಡು
ತ್ತೇನೆ'' ಎಂದು ಉತ್ತರಿಸಿದನು. [17]ಆದ್ದರಿಂದ ಜನರು
ತಮ್ಮ ದನಕರುಗಳನ್ನೂ ಕುದುರೆಗಳನ್ನೂ ಇತರ ಎಲ್ಲಾ
ಪಶುಗಳನ್ನೂ ಕೊಟ್ಟು ಆಹಾರವನ್ನು ಕೊಂಡು
ಕೊಂಡರು. ಆ ವರ್ಷ ಯೋಸೇಫನು ಅವರಿಗೆ ಆಹಾರ
ವನ್ನು ಕೊಟ್ಟು ಅವರ ಪಶುಗಳನ್ನು ಕೊಂಡುಕೊಂಡನು.
[18]ಆದರೆ ಮುಂದಿನ ವರ್ಷ, ಪಶುಗಳನ್ನು ಕೊಟ್ಟು
ಆಹಾರವನ್ನು ಕೊಂಡುಕೊಳ್ಳಲು ಜನರ ಬಳಿ ಪಶುಗಳಿರ
ಲಿಲ್ಲ. ಆದ್ದರಿಂದ ಜನರು ಯೋಸೇಫನಲ್ಲಿಗೆ ಹೋಗಿ,
''ನಮ್ಮಲ್ಲಿ ಹಣ ಇಲ್ಲವೆಂಬುದು ನಿನಗೆ ಗೊತ್ತೇ ಇದೆ.
ಅಲ್ಲದೆ ನಮ್ಮ ಪಶುಗಳೂ ನಿನ್ನ ಸ್ವತ್ತಾಗಿದೆ. ಆದ್ದರಿಂದ
ನಮ್ಮಲ್ಲಿ ಏನೂ ಉಳಿದಿಲ್ಲ. ನೀನು ನೋಡುತ್ತಿರುವ ನಮ್ಮ
ಶರೀರ ಮತ್ತು ನಮ್ಮ ಜಮೀನು ಮಾತ್ರ ಉಳಿದಿದೆ. [19]ನಿನ್ನ
ಕಣ್ಣೆದುರಿನಲ್ಲಿಯೇ ನಾವು ಖಂಡಿತವಾಗಿ ಸಾಯುತ್ತೇವೆ.
ಆದರೆ ನೀನು ನಮಗೆ ಆಹಾರವನ್ನು ಕೊಟ್ಟರೆ, ನಾವು
ಫರೋಹನಿಗೆ ನಮ್ಮ ಭೂಮಿಯನ್ನು ಕೊಟ್ಟು ಅವನ
ಗುಲಾಮರಾಗಿರುತ್ತೇವೆ. ಬಿತ್ತನೆ ಮಾಡಲು ನಮಗೆ ಬೀಜ
ವನ್ನು ಕೊಡು. ಆಗ ನಾವು ಬದುಕುತ್ತೇವೆ, ಸಾಯುವುದಿಲ್ಲ
ಮತ್ತು ಭೂಮಿಯೂ ಬೆಳೆಗಳನ್ನು ಫಲಿಸುತ್ತದೆ'' ಎಂದು
ಹೇಳಿದರು.
[20]ಆದ್ದರಿಂದ ಯೋಸೇಫನು ಈಜಿಪ್ಟಿನ ಎಲ್ಲಾ
ಜಮೀನನ್ನು ಫರೋಹನಿಗಾಗಿ ಕೊಂಡುಕೊಂಡನು.
ಹಸಿವೆಯಿಂದಾಗಿ ಈಜಿಪ್ಟಿನ ಎಲ್ಲಾ ಜನರು ಯೋಸೇಫ
ನಿಗೆ ತಮ್ಮ ಜಮೀನುಗಳನ್ನು ಮಾರಿದರು. [21]ಈಜಿಪ್ಟಿನ
ಎಲ್ಲಾ ಜನರು ಫರೋಹನ ಗುಲಾಮರಾಗಿದ್ದರು.*
[22]ಪುರೋಹಿತರು ಹೊಂದಿದ್ದ ಭೂಮಿಯನ್ನು ಮಾತ್ರ
ಯೋಸೇಫನು ಕೊಂಡುಕೊಳ್ಳಲಿಲ್ಲ. ಭೂಮಿಯನ್ನು

**ಎಲ್ಲಾ ... ಗುಲಾಮರಾಗಿದ್ದರು** ಅಥವಾ, ಅವನು ಜನರೆಲ್ಲರನ್ನೂ ಪಟ್ಟಣಗಳಿಗೆ ಬರಮಾಡಿಕೊಂಡು ಅವರನ್ನು ಈಜಿಪ್ಟಿನ ಒಂದು ಗಡಿಯಿಂದ ಮತ್ತೊಂದು ಗಡಿಯವರೆಗೂ ಗುಲಾಮರನ್ನಾಗಿ ಮಾಡಿದನು.

ಮಾರುವ ಅವಶ್ಯಕತೆ ಪುರೋಹಿತರಿಗೆ ಇರಲಿಲ್ಲ.
ಯಾಕಂದರೆ ಫರೋಹನೇ ಅವರಿಗೆ ಸಂಬಳವನ್ನು ಕೊಡು
ತ್ತಿದ್ದನು. ಆದ್ದರಿಂದ ಅವರು ಆ ಹಣದಿಂದ ಆಹಾರವನ್ನು
ಕೊಂಡುಕೊಂಡರು.

23ಯೋಸೇಫನು ಜನರಿಗೆ, ‘‘ಈಗ ನಾನು ನಿಮ್ಮನ್ನೂ
ನಿಮ್ಮ ಜಮೀನನ್ನೂ ಫರೋಹನಿಗಾಗಿ ಕೊಂಡುಕೊಂಡಿ
ದ್ದೇನೆ. ಆದ್ದರಿಂದ ನಾನು ನಿಮಗೆ ಬೀಜವನ್ನು ಕೊಡು
ತ್ತೇನೆ. ನೀವು ನಿಮ್ಮ ಜಮೀನುಗಳಲ್ಲಿ ಬಿತ್ತನೆ ಮಾಡಿರಿ.
24ಸುಗ್ಗಿಕಾಲ ಬಂದಾಗ, ನಿಮ್ಮ ಬೆಳೆಗಳಲ್ಲಿ ಐದನೆ ಒಂದು
ಭಾಗ ಫರೋಹನಿಗೆ ಸೇರಿದ್ದು. ಐದನೆ ನಾಲ್ಕು ಭಾಗವನ್ನು
ನಿಮಗೋಸ್ಕರ ಇಟ್ಟುಕೊಳ್ಳಿರಿ. ನೀವು ಆಹಾರಕ್ಕಾಗಿ
ಇಟ್ಟುಕೊಳ್ಳುವ ಬೀಜವನ್ನೇ ಮುಂದಿನ ವರ್ಷದ ಬಿತ್ತನೆ
ಗಾಗಿ ಉಪಯೋಗಿಸಬಹುದು. ಹೀಗೆ ನೀವು ನಿಮ್ಮ
ಕುಟುಂಬದವರಿಗೂ ಮಕ್ಕಳಿಗೂ ಪೋಷಣೆ ಮಾಡಿರಿ’’
ಎಂದು ಹೇಳಿದನು.

25ಆಗ ಜನರು, ‘‘ನೀನು ನಮ್ಮ ಜೀವನವನ್ನು ಉಳಿ
ಸಿರುವೆ. ನಾವು ಸಂತೋಷದಿಂದ ಫರೋಹನ ಗುಲಾಮ
ರಾಗುತ್ತೇವೆ’’ ಎಂದು ಹೇಳಿದರು.

26ಆದ್ದರಿಂದ ಯೋಸೇಫನು ಒಂದು ಕಾನೂನನ್ನು
ಮಾಡಿದನು. ಅದು ಇಂದಿಗೂ ಜಾರಿಯಲ್ಲಿದೆ. ಆ
ಕಾನೂನಿನ ಪ್ರಕಾರ, ಭೂಮಿಯ ಪಸಲಿನಲ್ಲಿ ಐದನೇ
ಒಂದು ಭಾಗವು ಫರೋಹನಿಗೆ ಸೇರಿದ್ದಾಗಿದೆ.
ಫರೋಹನು ಎಲ್ಲಾ ಜಮೀನಿಗೂ ಒಡೆಯನಾಗಿದ್ದಾನೆ.
ಪುರೋಹಿತರ ಭೂಮಿಯು ಮಾತ್ರ ಅವನಿಗೆ ಸೇರಿಲ್ಲ.

### ‘‘ನನ್ನನ್ನು ಈಜಿಪ್ಟಿನಲ್ಲಿ ಸಮಾಧಿ ಮಾಡಬೇಡ’’

27ಇಸ್ರೇಲನು (ಯಾಕೋಬ) ಈಜಿಪ್ಟಿನಲ್ಲಿ ಇಳಿದು
ಕೊಂಡನು. ಅವನು ಗೋಷೆನ್ ಪ್ರಾಂತ್ಯದಲ್ಲಿ ವಾಸಿಸಿ
ದನು. ಅವನ ಕುಟುಂಬವು ಬೆಳೆದು ತುಂಬ ದೊಡ್ಡ
ದಾಯಿತು. ಅವರು ಈಜಿಪ್ಟಿನಲ್ಲಿ ಜಮೀನನ್ನು ಪಡೆದು
ಕೊಂಡರು ಮತ್ತು ಸುಖವಾಗಿದ್ದರು.

28ಯಾಕೋಬನು ಈಜಿಪ್ಟಿನಲ್ಲಿ ಹದಿನೇಳು ವರ್ಷಗಳ
ಕಾಲ ಜೀವಿಸಿದನು. ಆಗ ಯಾಕೋಬನಿಗೆ ನೂರನಲ
ವತ್ತೇಳು ವರ್ಷವಾಗಿತ್ತು. 29ಇಸ್ರೇಲನು (ಯಾಕೋ
ಬನು) ಸಾಯುವ ಕಾಲ ಸಮೀಪಿಸಿತು. ಅವನಿಗೆ ತಾನು
ಸಾಯುತ್ತೇನೆಂದು ತಿಳಿದುಬಂದಾಗ, ತನ್ನ ಮಗನಾದ
ಯೋಸೇಫನನ್ನು ಕರೆಯಿಸಿ,‘‘ನೀನು ನನ್ನನ್ನು ಪ್ರೀತಿಸುವು
ದಾದರೆ, ನಿನ್ನ ಕೈಯನ್ನು ನನ್ನ ತೊಡೆಯ ಕೆಳಗಿಟ್ಟು
ಪ್ರಮಾಣಮಾಡು. ನಾನು ಹೇಳಿದ್ದನ್ನು ನಡೆಸುವು
ದಾಗಿಯೂ ನನಗೆ ನಂಬಿಗಸ್ತನಾಗಿರುವುದಾಗಿಯೂ
ಪ್ರಮಾಣ ಮಾಡು. ನಾನು ಸತ್ತಾಗ, ನನ್ನನ್ನು ಈಜಿಪ್ಟಿನಲ್ಲಿ
ಸಮಾಧಿ ಮಾಡಬೇಡ. 30ನನ್ನ ಪೂರ್ವಿಕರನ್ನು ಸಮಾಧಿ
ಮಾಡಿದ ಸ್ಥಳದಲ್ಲಿಯೇ ನನ್ನನ್ನು ಸಮಾಧಿ ಮಾಡು.
ನನ್ನನ್ನು ಈಜಿಪ್ಟಿನಿಂದ ತೆಗೆದುಕೊಂಡು ಹೋಗಿ ನಮ್ಮ
ಕುಟುಂಬದವರ ಸ್ಮಶಾನದಲ್ಲಿ ಸಮಾಧಿ ಮಾಡು’’ ಎಂದು
ಹೇಳಿದನು.

ಯೋಸೇಫನು, ‘‘ನೀನು ಹೇಳಿದಂತೆಯೇ ಮಾಡು
ತ್ತೇನೆ’’ ಎಂದು ಪ್ರಮಾಣ ಮಾಡಿದನು.

31ಯಾಕೋಬನು, ‘‘ನನಗೆ ಪ್ರಮಾಣ ಮಾಡು’’
ಎಂದು ಹೇಳಿದ್ದರಿಂದ ಯೋಸೇಫನು ಅವನಿಗೆ ಪ್ರಮಾಣ
ಮಾಡಿದನು. ಆಮೇಲೆ ಇಸ್ರೇಲನು ಹಾಸಿಗೆಯ ಮೇಲೆ
ಮತ್ತೆ ತನ್ನ ತಲೆಬಾಗಿ ದೇವರಿಗೆ ನಮಸ್ಕರಿಸಿದನು.

### ಮನಸ್ಸೆ ಮತ್ತು ಎಫ್ರಾಯೀಮರಿಗೆ ಆಶೀರ್ವಾದಗಳು

48 ಸ್ವಲ್ಪಕಾಲದ ನಂತರ, ತಂದೆಯು ಬಹಳ
ಅನಾರೋಗ್ಯದಿಂದಿರುವುದು ಯೋಸೇಫನಿಗೆ
ತಿಳಿಯಿತು. ಆದ್ದರಿಂದ ಅವನು ತನ್ನ ಇಬ್ಬರು ಗಂಡು ಮಕ್ಕ
ಳಾದ ಮನಸ್ಸೆಯನ್ನು ಮತ್ತು ಎಫ್ರಾಯೀಮನನ್ನು ಕರೆದು
ಕೊಂಡು ತನ್ನ ತಂದೆಯ ಬಳಿಗೆ ಬಂದನು.
2ಯೋಸೇಫನು ಬಂದಾಗ ಯಾರೋ ಒಬ್ಬರು ಇಸ್ರೇಲ
ನಿಗೆ, ‘‘ನಿನ್ನ ಮಗನಾದ ಯೋಸೇಫನು ನಿನ್ನನ್ನು
ನೋಡಲು ಬಂದಿದ್ದಾನೆ’’ ಎಂದು ಹೇಳಿದನು. ಆಗ
ಅವನು ಬಹಳ ಬಲಹೀನವಾಗಿದ್ದರೂ ಕಷ್ಟಪಟ್ಟು
ಹಾಸಿಗೆಯ ಮೇಲೆ ಕುಳಿತುಕೊಂಡನು.

3ಬಳಿಕ ಇಸ್ರೇಲನು ಯೋಸೇಫನಿಗೆ, ‘‘ಸರ್ವಶಕ್ತನಾದ
ದೇವರು ನನಗೆ ಕಾನಾನ್ ದೇಶದ ಲೂಜ್ ಎಂಬ ಸ್ಥಳ
ದಲ್ಲಿ ಕಾಣಿಸಿಕೊಂಡು ನನ್ನನ್ನು ಆಶೀರ್ವದಿಸಿದನು.
4ದೇವರು ನನಗೆ, ‘ನಾನು ನಿನಗೆ ಅನೇಕ ಮಕ್ಕಳನ್ನು
ಕೊಡುತ್ತೇನೆ; ನಿನ್ನ ಸಂತತಿಯವರು ಅನೇಕ ಜನಾಂಗಗ
ಳಾಗುವರು; ನಿನ್ನ ಸಂತತಿಯವರಿಗೆ ನಾನು ಈ ದೇಶವನ್ನು
ಶಾಶ್ವತವಾಗಿ ಕೊಡುವೆನು’ ಎಂದು ಹೇಳಿದನು. 5ಈಗ
ನಿನಗೆ ಇಬ್ಬರು ಗಂಡುಮಕ್ಕಳಿದ್ದಾರೆ. ನಾನು ಈಜಿಪ್ಟಿಗೆ
ಬರುವುದಕ್ಕಿಂತ ಮೊದಲೇ ಅವರು ಇಲ್ಲಿ ಹುಟ್ಟಿದರು.
ನಿನ್ನ ಇಬ್ಬರು ಗಂಡುಮಕ್ಕಳಾದ ಮನಸ್ಸೆ ಮತ್ತು ಎಫ್ರಾ
ಯೀಮ್ ನನ್ನ ಮಕ್ಕಳಂತೆಯೇ ಇದ್ದಾರೆ. ಅವರು ನನಗೆ
ರೂಬೇನ್ ಮತ್ತು ಸಿಮೆಯೋನರಂತೆಯೇ ಇದ್ದಾರೆ.
6ಆದ್ದರಿಂದ ಈ ಇಬ್ಬರು ಗಂಡುಮಕ್ಕಳು ನನಗೆ ಮಕ್ಕ
ಳಂತೆಯೇ ಇರುತ್ತಾರೆ. ನಾನು ಹೊಂದಿರುವ ಪ್ರತಿ
ಯೊಂದರಲ್ಲಿಯೂ ಅವರು ಪಾಲನ್ನು ಹೊಂದುವರು.
ಆದರೆ ನಿನಗೆ ಬೇರೆ ಗಂಡು ಮಕ್ಕಳಿದ್ದರೆ ಅವರು
ಎಫ್ರಾಯೀಮ್ ಮತ್ತು ಮನಸ್ಸೆಯರಿಗೆ ಮಕ್ಕಳಾಗಿ
ರುತ್ತಾರೆ. ಅಂದರೆ ಎಫ್ರಾಯೀಮ್ ಮತ್ತು ಮನಸ್ಸೆ
ಹೊಂದಿರುವ ಪ್ರತಿಯೊಂದರಲ್ಲಿ ಅವರ ಪಾಲನ್ನು

ಹೊಂದುವರು. 7ಪದ್ದನ್ಅರಾಮಿನಿಂದ ಹಿಂತಿರುಗಿ
ಬರುತ್ತಿರುವಾಗ ರಾಹೇಲಳು ಸತ್ತಳು. ಇದು ನನಗೆ ತುಂಬ
ದುಃಖವನ್ನು ಉಂಟುಮಾಡಿತು. ನಾವು ಕಾನಾನ್ ದೇಶ
ದಲ್ಲಿ ಎಫ್ರಾತ್ ನಗರದ ಕಡೆಗೆ ಪ್ರಯಾಣ ಮಾಡುತ್ತಿ
ದ್ದೆವು. ಆದ್ದರಿಂದ ನಾನು ಅವಳನ್ನು ಎಫ್ರಾತ್ ನಗರದ
ರಸ್ತೆಯಲ್ಲಿ ಸಮಾಧಿ ಮಾಡಿದೆನು (ಎಫ್ರಾತ್ ಅಂದರೆ
ಬೇತ್ಲೆಹೇಮ್)'' ಎಂದು ಹೇಳಿದನು.

8ಆಮೇಲೆ ಇಸ್ರೇಲನು ಯೋಸೇಫನ ಗಂಡು ಮಕ್ಕ
ಳನ್ನು ನೋಡಿ, ''ಈ ಹುಡುಗರು ಯಾರು?'' ಎಂದು
ಕೇಳಿದನು.

9ಯೋಸೇಫನು ತನ್ನ ತಂದೆಗೆ, ''ಇವರು ನನ್ನ ಮಕ್ಕಳು.
ದೇವರು ನನಗೆ ಕೊಟ್ಟಿರುವ ಗಂಡುಮಕ್ಕಳೇ ಇವರು''
ಎಂದು ಹೇಳಿದನು. ಇಸ್ರೇಲನು, ''ಅವರನ್ನು ನನ್ನ ಬಳಿಗೆ
ಕರೆದುಕೊಂಡು ಬಾ, ನಾನು ಅವರನ್ನು ಆಶೀರ್ವ
ದಿಸುತ್ತೇನೆ'' ಎಂದು ಹೇಳಿದನು.

10ಇಸ್ರೇಲನಿಗೆ ತುಂಬ ವಯಸ್ಸಾಗಿತ್ತು. ಅವನಿಗೆ ಕಣ್ಣು
ಸರಿಯಾಗಿ ಕಾಣುತ್ತಿರಲಿಲ್ಲ. ಆದ್ದರಿಂದ ಯೋಸೇಫನು
ಅವರನ್ನು ತಂದೆಯ ಬಳಿಗೆ ಕರೆದುಕೊಂಡು ಬಂದನು.
ಇಸ್ರೇಲನು ಆ ಹುಡುಗರನ್ನು ಅಪ್ಪಿಕೊಂಡು ಮುದ್ದಿ
ಟ್ಟನು. 11ಬಳಿಕ ಇಸ್ರೇಲನು ಯೋಸೇಫನಿಗೆ,''ನಾನು
ಮತ್ತೆ ನಿನ್ನ ಮುಖವನ್ನು ನೋಡುತ್ತೇನೆ ಎಂದು ಯೋಚಿಸಿ
ರಲಿಲ್ಲ. ಆದರೆ ನಾನು ನಿನ್ನನ್ನೂ ನಿನ್ನ ಮಕ್ಕಳನ್ನೂ
ನೋಡುವಂತೆ ದೇವರು ಅನುಗ್ರಹಿಸಿದ್ದಾನೆ'' ಎಂದು
ಹೇಳಿದನು.

12ಆಗ ಯೋಸೇಫನು ಇಸ್ರೇಲನ ತೊಡೆಯ ಮೇಲೆ
ಕುಳಿತಿದ್ದ ತನ್ನ ಗಂಡು ಮಕ್ಕಳನ್ನು ಎತ್ತಿಕೊಂಡನು. ಬಳಿಕ
ಅವರು ಇಸ್ರೇಲನ ಮುಂದೆ ಅಡ್ಡಬಿದ್ದು ನಮಸ್ಕರಿಸಿದರು.
13ಯೋಸೇಫನು ಎಫ್ರಾಯೀಮನನ್ನು ತನ್ನ ಬಲಭಾಗ
ದಲ್ಲಿಯೂ ಮನಸ್ಸೆಯನ್ನು ತನ್ನ ಎಡಭಾಗದಲ್ಲಿಯೂ
ಕುಳ್ಳಿರಿಸಿದನು. (ಆದ್ದರಿಂದ ಎಫ್ರಾಯೀಮನು ಇಸ್ರೇಲನ
ಎಡಭಾಗಲ್ಲಿಯೂ ಮನಸ್ಸೆಯು ಬಲಭಾಗದಲ್ಲಿಯೂ
ಇದ್ದರು.) 14ಆದರೆ ಇಸ್ರೇಲನು ತನ್ನ ಕೈಗಳನ್ನು ವಾರೆ
ಮಾಡಿ ತನ್ನ ಬಲಗೈಯನ್ನು ಚಿಕ್ಕಮಗನಾದ
ಎಫ್ರಾಯೀಮನ ತಲೆಯ ಮೇಲಿಟ್ಟು ಎಡಗೈಯನ್ನು
ದೊಡ್ಡಮಗನಾದ ಮನಸ್ಸೆಯ ತಲೆಯ ಮೇಲಿಟ್ಟನು.
ಮನಸ್ಸೆಯು ಹಿರಿಯ ಮಗನಾಗಿದ್ದರೂ ಇಸ್ರೇಲನು
ಮನಸ್ಸೆಯ ತಲೆಯ ಮೇಲೆ ಎಡಗೈಯನ್ನಿಟ್ಟನು.

15ಬಳಿಕ ಇಸ್ರೇಲನು ಯೋಸೇಫನನ್ನು ಆಶೀರ್ವದಿಸಿ
ಇಂತೆಂದನು:

''ನನ್ನ ಪೂರ್ವಿಕರಾದ ಅಬ್ರಹಾಮನೂ ಇಸಾಕನೂ
ನಮ್ಮ ದೇವರನ್ನು ಆರಾಧಿಸಿದರು. ಆ ದೇವರೇ ನನ್ನನ್ನು
ನನ್ನ ಜೀವಮಾನವೆಲ್ಲಾ ನಡೆಸಿದನು.

16ನನ್ನನ್ನು ಎಲ್ಲಾ ತೊಂದರೆಗಳಿಂದ ಕಾಪಾಡಿದ
ದೂತನೇ ಆತನು. ಈ ಹುಡುಗರನ್ನು ಆಶೀರ್ವದಿಸ
ಬೇಕೆಂದು ನಾನು ಆತನಲ್ಲಿ ಪ್ರಾರ್ಥಿಸುವೆನು. ಇಂದಿನಿಂದ
ಈ ಮಕ್ಕಳು ನನ್ನ ಹೆಸರನ್ನೇ ಹೊಂದಿಕೊಳ್ಳುವರು. ನನ್ನ
ಪೂರ್ವಿಕರಾದ ಅಬ್ರಹಾಮ್ ಮತ್ತು ಇಸಾಕರ ಹೆಸರನ್ನು
ಇವರು ಹೊಂದಿಕೊಳ್ಳುವರು. ಇವರು ಭೂಮಿಯ
ಮೇಲೆ ಬೆಳೆದು ದೊಡ್ಡ ಕುಟುಂಬಗಳಾಗುವಂತೆಯೂ
ದೊಡ್ಡ ಜನಾಂಗಗಳಾಗುವಂತೆಯೂ ನಾನು
ಪ್ರಾರ್ಥಿಸುವೆನು.''

17ಇಸ್ರೇಲನು ತನ್ನ ಬಲಗೈಯನ್ನು ಎಫ್ರಾಯೀಮನ
ತಲೆಯ ಮೇಲಿಟ್ಟಿದ್ದರಿಂದ ಯೋಸೇಫನು ಅಸಮಾಧಾನ
ದಿಂದ ನೋಡಿ ತಂದೆಯ ಕೈಯನ್ನು ಹಿಡಿದುಕೊಂಡನು;
ಅಲ್ಲದೆ ತಂದೆಯ ಕೈಯನ್ನು ಎಫ್ರಾಯೀಮನ ತಲೆಯ
ಮೇಲಿಂದ ತೆಗೆದುಕೊಂಡು ಮನಸ್ಸೆಯ ತಲೆಯ ಮೇಲೆ
ಇಡಬೇಕೆಂದಿದ್ದನು. 18ಯೋಸೇಫನು ತನ್ನ ತಂದೆಗೆ,
''ನೀನು ನಿನ್ನ ಬಲಗೈಯನ್ನು ತಪ್ಪಾಗಿ ಎಫ್ರಾಯೀಮನ
ಮೇಲೆ ಇಟ್ಟಿರುವೆ. ಮೊದಲು ಹುಟ್ಟಿದವನು ಮನಸ್ಸೆ''
ಎಂದು ಹೇಳಿದನು.

19ಆದಕ್ಕೆ ಅವನ ತಂದೆಯು ''ನನಗೆ ಗೊತ್ತು ಮಗನೇ,
ನನಗೆ ಗೊತ್ತು. ಮನಸ್ಸೆ ಮೊದಲು ಹುಟ್ಟಿದವನು. ಅವನು
ಮಹಾವ್ಯಕ್ತಿಯಾಗುವನು. ಅವನು ಅನೇಕ ಜನರಿಗೆ ತಂದೆ
ಯಾಗುವನು. ಆದರೆ ತಮ್ಮನು ಅಣ್ಣನಿಗಿಂತ ಮಹಾ ವ್ಯಕ್ತಿ
ಯಾಗುವನು. ಅವನ ಕುಟುಂಬವು ತುಂಬ ದೊಡ್ಡದಾಗು
ವುದು'' ಎಂದು ಹೇಳಿದನು.

20ಅಂದು ಇಸ್ರೇಲನು ಅವರನ್ನು ಆಶೀರ್ವದಿಸಿ,
''ಇಸ್ರೇಲರು ನಿಮ್ಮ ಹೆಸರುಗಳ ಮೂಲಕ ಬೇರೆ
ಯವರನ್ನು ಆಶೀರ್ವದಿಸುವರು. ''ದೇವರು ನಿನ್ನನ್ನು
ಎಫ್ರಾಯೀಮನಂತೆಯೂ ಮನಸ್ಸೆಯಂತೆಯೂ
ಮಾಡಲಿ ಎಂದು ಹೇಳುವರು'' ಎಂದನು.

ಹೀಗೆ, ಇಸ್ರಾಯೇಲನು ಎಫ್ರಾಯೀಮನನ್ನು ಮನಸ್ಸೆ
ಗಿಂತ ದೊಡ್ಡವನನ್ನಾಗಿ ಮಾಡಿದನು.

21ಬಳಿಕ ಇಸ್ರೇಲನು ಯೋಸೇಫನಿಗೆ, ''ನೋಡು,
ನಾನು ಸಾಯುವ ಕಾಲ ಸಮೀಪಿಸಿದೆ. ಆದರೆ ದೇವರು
ಇನ್ನೂ ನಿನ್ನ ಸಂಗಡವಿರುವನು. ಅವನು ನಿನ್ನನ್ನು ನಿನ್ನ
ಪೂರ್ವಿಕರ ದೇಶಕ್ಕೆ ಹಿಂತಿರುಗಿಸುವನು.22ನಾನು ನಿನ್ನ
ಸಹೋದರರಿಗೆ ಕೊಟ್ಟ ಪಾಲಿಗಿಂತ ಹೆಚ್ಚಾಗಿ
ಬೇರೊಂದನ್ನು ನಿನಗೆ ಕೊಟ್ಟಿದ್ದೇನೆ. ನಾನು
ಅಮೋರಿಯರಿಂದ ಗೆದ್ದುಕೊಂಡಿರುವ ಬೆಟ್ಟವನ್ನು ನಿನಗೆ
ಕೊಡುವೆನು. ನಾನು ಅವರೊಂದಿಗೆ ಖಡ್ಗಗಳಿಂದಲೂ
ಬಿಲ್ಲುಗಳಿಂದಲೂ ಹೋರಾಡಿ ಆ ಬೆಟ್ಟವನ್ನು
ವಶಪಡಿಸಿಕೊಂಡಿದ್ದೇನೆ'' ಎಂದು ಹೇಳಿದನು.

## ಯಾಕೋಬನು ತನ್ನ ಗಂಡು ಮಕ್ಕಳನ್ನು ಆಶೀರ್ವದಿಸಿದ್ದು

49 ಬಳಿಕ ಯಾಕೋಬನು ತನ್ನ ಗಂಡು ಮಕ್ಕಳನ್ನು
ತನ್ನ ಬಳಿಗೆ ಕರೆಯಿಸಿ, ‘‘ನನ್ನ ಎಲ್ಲಾ ಗಂಡು
ಮಕ್ಕಳೇ, ನನ್ನ ಬಳಿಗೆ ಬನ್ನಿರಿ. ನಿಮಗೆ ಮುಂದೆ ಏನು
ಸಂಭವಿಸುವುದೆಂದು ತಿಳಿಸುತ್ತೇನೆ.
2‘‘ಯಾಕೋಬನ ಗಂಡುಮಕ್ಕಳೇ, ಒಟ್ಟಾಗಿ ಬಂದು
ಕೇಳಿರಿ. ನಿಮ್ಮ ತಂದೆಯಾದ ಇಸ್ರೇಲನು ಹೇಳುವುದನ್ನು
ಕೇಳಿರಿ’’ ಎಂದು ಹೇಳಿದನು.

### ರೂಬೇನ

3‘‘ರೂಬೇನನೇ, ನೀನು ನನ್ನ ಚೊಚ್ಚಲು ಮಗ. ನೀನೇ
ನನ್ನ ಮೊದಲನೆಯ ಮಗ. ನೀನು ನನ್ನ ಇತರ ಎಲ್ಲಾ
ಗಂಡುಮಕ್ಕಳಿಗಿಂತ ಶಕ್ತಿಶಾಲಿಯೂ ಗೌರವಯುತನೂ
ಆಗಿರುವೆ.
4ಆದರೆ ನೀನು ಪ್ರಳಯದ ಭಯಂಕರವಾದ ಅಲೆ
ಗಳಂತಿರುವೆ. ನೀನು ನನ್ನ ಮಕ್ಕಳಿಗಿಂತ ಅತ್ಯಂತ ಪ್ರಮುಖ
ನಾಗಿರುವುದಿಲ್ಲ. ನಿನ್ನ ತಂದೆಗೆ ಸೇರಿದ ಸ್ತ್ರೀಯೊಂದಿಗೆ
ನೀನು ಮಲಗಿಕೊಂಡೆ. ನೀನು ನಿನ್ನ ತಂದೆಯ ಹಾಸಿಗೆಗೆ
ಗೌರವವನ್ನು ತೋರಿಸಲಿಲ್ಲ.’’

### ಸಿಮೆಯೋನ ಮತ್ತು ಲೇವಿ

5‘‘ಸಿಮೆಯೋನನೂ ಲೇವಿಯೂ ಸಹೋದರರಾಗಿ
ದ್ದಾರೆ. ಅವರು ತಮ್ಮ ಖಡ್ಗಗಳೊಡನೆ ಹೋರಾಡಲು
ಇಷ್ಟಪಡುವರು. 6ಅವರು ಗುಟ್ಟಾಗಿ ಕೆಟ್ಟಕಾರ್ಯಗಳನ್ನು
ಯೋಚಿಸಿದರು. ಅವರ ರಹಸ್ಯಕೂಟಗಳನ್ನು ನನ್ನ ಆತ್ಮವು
ಸ್ವೀಕರಿಸುವುದಿಲ್ಲ. ಅವರು ಕೋಪಗೊಂಡಾಗ ಗಂಡಸ
ರನ್ನು ಕೊಂದುಹಾಕಿದರು. ಅವರು ಮೋಜಿಗೆಂದೇ
ಪ್ರಾಣಿಗಳನ್ನು ಹಿಂಸಿಸಿದರು.
7ಅವರ ಕೋಪವೇ ಅವರಿಗೆ ಶಾಪ. ಅದು ತುಂಬಾ
ಶಕ್ತಿಶಾಲಿಯಾದದ್ದು. ಅವರು ಹುಚ್ಚರಾದಾಗ ತುಂಬಾ
ಕ್ರೂರಿಗಳು. ಅವರಿಗೆ ಯಾಕೋಬನ ನಾಡಿನಲ್ಲಿ ತಮ್ಮದೇ
ಆದ ನಾಡನ್ನು ಹೊಂದಿಕೊಳ್ಳುವುದಿಲ್ಲ. ಅವರು
ಇಸ್ರೇಲಿನಲ್ಲೆಲ್ಲಾ ಹರಡಿಕೊಳ್ಳುವರು.’’

### ಯೆಹೂದ

8‘‘ಯೆಹೂದನೇ ನಿನ್ನ ಸಹೋದರರು ನಿನ್ನನ್ನು
ಹೊಗಳುವರು. ನೀನು ನಿನ್ನ ವೈರಿಗಳನ್ನು ಸೋಲಿಸುವೆ.
ನಿನ್ನ ಸಹೋದರರು ನಿನಗೆ ಅಡ್ಡಬೀಳುವರು.
9ಯೆಹೂದನು ಒಂದು ಪ್ರಾಣಿಯನ್ನು ಕೊಂದ ಸಿಂಹ
ದಂತಿದ್ದಾನೆ. ಮಗನೇ, ನೀನು ಸಿಂಹದಂತೆ ಬೇಟೆಗಾಗಿ
ಹೊಂಚುಹಾಕಿ ನಿಂತಿರುವೆ. ಯೆಹೂದನು ಸಿಂಹದಂತಿರು
ವನು. ಅವನು ಮಲಗಿ ವಿಶ್ರಮಿಸಿಕೊಳ್ಳವನು; ಅವನನ್ನು
ಕೆಣಕಲು ಯಾರಿಗೂ ಧೈರ್ಯವಿಲ್ಲ. 10ರಾಜದಂಡವನ್ನು
ಹಿಡಿಯತಕ್ಕವನು ಬರುವ ತನಕ ಯೆಹೂದನು ರಾಜ
ದಂಡವನ್ನು ಹಿಡಿದುಕೊಳ್ಳುವನು. ಅವನ ಸಂತತಿಯವರು
ಶಾಶ್ವತವಾಗಿ ಆಳುವರು; ಅನ್ಯಜನಾಂಗಗಳು ಅವನಿಗೆ ಕಪ್ಪ
ಕಾಣಿಕೆಗಳನ್ನು ತಂದು ಅವನಿಗೆ ವಿಧೇಯರಾಗಿರುವರು.
11ಅವನು ತನ್ನ ಕತ್ತೆಯನ್ನು ದ್ರಾಕ್ಷೆಬಳ್ಳಿಗೆ ಕಟ್ಟುವನು; ತನ್ನ
ಪ್ರಾಯದ ಕತ್ತೆಯನ್ನು ಉತ್ತಮವಾದ ದ್ರಾಕ್ಷೆಬಳ್ಳಿಗೆ
ಕಟ್ಟುವನು. ಅವನು ಉತ್ತಮವಾದ ದ್ರಾಕ್ಷಾರಸದಿಂದ ತನ್ನ
ಬಟ್ಟೆಗಳನ್ನು ತೊಳೆಯುವನು.
12ಅವನು ದ್ರಾಕ್ಷಾರಸವನ್ನು ಕುಡಿಯುವುದರಿಂದ
ಅವನ ಕಣ್ಣುಗಳು ಕೆಂಪಾಗಿರುತ್ತವೆ. ಅವನು ಹಾಲು
ಕುಡಿಯುವುದರಿಂದ ಅವನ ಹಲ್ಲುಗಳು ಬಿಳು
ಪಾಗಿರುತ್ತವೆ.’’

### ಜೆಬುಲೂನ

13‘‘ಜೆಬುಲೂನನು ಸಮುದ್ರದ ಕರಾವಳಿಯಲ್ಲಿ ವಾಸಿ
ಸುವನು; ಸಮುದ್ರ ತೀರವು ಅವನ ಹಡಗುಗಳಿಗೆ ಸುರಕ್ಷಿತ
ವಾದ ಸ್ಥಳವಾಗಿದೆ. ಅವನ ನಾಡು ಚೀದೋನ್ ಪಟ್ಟಣ
ದವರೆಗೂ ವಿಸ್ತರಿಸುವುದು.’’

### ಇಸ್ಸಾಕಾರ

14‘‘ಇಸ್ಸಾಕಾರನು ಬಹಳ ಕಷ್ಟಪಟ್ಟು ದುಡಿಯುವ
ಕತ್ತೆಯಂತಿದ್ದಾನೆ. ಅವನು ಭಾರವಾದ ಹೊರೆಯನ್ನು
ಹೊರುವುದರಿಂದ ಮಲಗಿ ವಿಶ್ರಮಿಸಿಕೊಳ್ಳುವನು.
15ಅವನು ತನ್ನ ವಿಶ್ರಾಂತಿಗೆ ಅನುಕೂಲವಾಗಿರುವ ಮತ್ತು
ಪ್ರಶಾಂತವಾಗಿರುವ ನಾಡನ್ನು ನೋಡುವನು. ಅವನು
ಭಾರವಾದ ಹೊರೆಗಳನ್ನು ಹೊರುವುದಕ್ಕೂ ಗುಲಾಮ
ನಂತೆ ದುಡಿಯುವುದಕ್ಕೂ ಒಪ್ಪಿಕೊಳ್ಳುವನು.’’

### ದಾನ

16‘‘ಇತರ ಇಸ್ರೇಲರ ಕುಟುಂಬಗಳಿಗೆ ತೀರ್ಪುಮಾಡು
ವಂತೆ, ದಾನನು ತನ್ನ ಸ್ವಂತ ಜನರಿಗೆ ತೀರ್ಪು ಮಾಡುತ್ತಾನೆ.
17ದಾನನು ರಸ್ತೆಯ ಬಳಿಯಲ್ಲಿರುವ ಹಾವಿನಂತಿರು
ವನು.’’ ದಾರಿಯ ಸಮೀಪದಲ್ಲಿ ಮಲಗಿದ್ದು ಕುದುರೆಯ
ಹಿಮ್ಮಡಿಯನ್ನು ಕಚ್ಚಿ ಸವಾರನನ್ನು ಬೀಳಿಸುವ ಸರ್ಪದಂತಿ
ರುವನು. 18‘‘ಯೆಹೋವನೇ, ನಿನ್ನಿಂದುಂಟಾಗುವ
ರಕ್ಷಣೆಗಾಗಿ ನಾನು ಕಾಯುತ್ತಿದ್ದೇನೆ.’’

### ಗಾದ

[19]‘‘ಒಂದು ಕಳ್ಳರ ಗುಂಪು ಗಾದನ ಮೇಲೆ ಆಕ್ರಮಣ
ಮಾಡುವುದು. ಆದರೆ ಗಾದನು ಅವರನ್ನು ಓಡಿಸಿ
ಬಿಡುವನು.’’

### ಆಶೇರ

[20]‘‘ಆಶೇರನ ನಾಡು ಒಳ್ಳೆಯ ಆಹಾರವನ್ನು ಯಥೇಚ್ಛ
ವಾಗಿ ಫಲಿಸುತ್ತದೆ; ರಾಜನಿಗೆ ಸಾಕಾಗುವಷ್ಟು ಒಳ್ಳೆಯ
ಆಹಾರವು ಅವನಲ್ಲಿರುವುದು.’’

### ನಫ್ತಾಲಿಯ

[21]‘‘ನಫ್ತಾಲಿಯನು ಸ್ವತಂತ್ರವಾಗಿ ಓಡುವ ಜಿಂಕೆ
ಯಂತಿದ್ದಾನೆ. ಅವನ ಮಾತುಗಳು ಅದರ ಸುಂದರವಾದ
ಮರಿಗಳಂತಿವೆ.’’

### ಯೋಸೇಫ

[22]‘‘ಯೋಸೇಫನು ಬಹು ಯಶಸ್ವಿಯಾಗಿದ್ದಾನೆ.
ಯೋಸೇಫನು ಹಣ್ಣನ್ನು ಅಧಿಕವಾಗಿ ಫಲಿಸುವ ದ್ರಾಕ್ಷೆ
ಬಳ್ಳಿಯಂತಿರುವನು. ಅವನು ವಸಂತಕಾಲದಲ್ಲಿ ಬೆಳೆ
ಯುವ ದ್ರಾಕ್ಷೆಬಳ್ಳಿಯಂತಿರುವನು. ಅವನು ಗೋಡೆಯ
ಆಚೆಗೆ ಚಾಚಿಕೊಂಡಿರುವ ದ್ರಾಕ್ಷೆಬಳ್ಳಿಯಂತಿರುವನು.
[23]ಅನೇಕ ಜನರು ಅವನ ವಿರುದ್ಧವಾಗಿ ಹೋರಾಡಿ
ದರು. ಬಿಲ್ಲುಗಳನ್ನು ಹೊಂದಿದ್ದ ಜನರು ಅವನನ್ನು
ಇಷ್ಟಪಡಲಿಲ್ಲ. [24]ಆದರೆ ಅವನು ತನ್ನ ಹೋರಾಟದಲ್ಲಿ
ಬಲಿಷ್ಠವಾದ ಬಿಲ್ಲಿನಿಂದಲೂ ತನ್ನ ನಿಪುಣವಾದ ತೋಳು
ಗಳಿಂದಲೂ ಗೆದ್ದನು. ಅವನು ಶಕ್ತಿಯನ್ನು ಯಾಕೋಬನ
ಪರಾಕ್ರಮಿಯಿಂದಲೂ ಇಸ್ರೇಲಿನ ಬಂಡೆಯಾದಾತ
ನಿಂದಲೂ ಕುರುಬನಿಂದಲೂ
[25]ನಿಮ್ಮ ತಂದೆಯ ದೇವರಿಂದಲೂ ಪಡೆದುಕೊಳ್ಳು
ವನು. ದೇವರು ನಿನ್ನನ್ನು ಆಶೀರ್ವದಿಸುವನು. ಸರ್ವಶಕ್ತ
ನಾದ ದೇವರು ನಿನ್ನನ್ನು ಆಶೀರ್ವದಿಸಲಿ. ಆತನು ಮೇಲಿ
ರುವ ಆಕಾಶದಿಂದ ನಿನಗೆ ಆಶೀರ್ವಾದಗಳನ್ನು ಕೊಡಲಿ.
ಆತನು ಕೆಳಗಿನ ಆಳವಾದ ಸಾಗರದಿಂದ ನಿನಗೆ ಆಶೀರ್ವಾ
ದಗಳನ್ನು ಕೊಡಲಿ. ಆತನು ನಿನಗೆ ಸ್ತನಗಳಿಂದಲೂ ಗರ್ಭ
ದಿಂದಲೂ ಆಶೀರ್ವಾದಗಳನ್ನು ಕೊಡಲಿ.
[26]ನನ್ನ ತಂದೆ ತಾಯಿಗಳಿಗೆ ಅನೇಕಾನೇಕ ಒಳ್ಳೆಯ
ಸಂಗತಿಗಳು ಸಂಭವಿಸಿದವು. ನಿನ್ನ ತಂದೆಯಾದ ನಾನು
ಅದಕ್ಕಿಂತಲೂ ಹೆಚ್ಚು ಆಶೀರ್ವಾದ ಹೊಂದಿಕೊಂಡೆನು.
ನಿನ್ನ ಸಹೋದರರು ನಿನ್ನನ್ನು ದೂರಮಾಡಲು ಪ್ರಯ
ತ್ನಿಸಿದರು. ಆದರೆ ಈಗ ನನ್ನ ಎಲ್ಲಾ ಆಶೀರ್ವಾದಗಳು
ನಿನ್ನ ಮೇಲೆ ಎತ್ತರವಾದ ಬೆಟ್ಟದೋಪಾದಿಯಲ್ಲಿ
ರಾಶಿಯಂತಿದೆ.’’

### ಬೆನ್ಯಾಮೀನ

[27]‘‘ಬೆನ್ಯಾಮೀನನು ಹಸಿದಿರುವ ತೋಳದಂತಿದ್ದಾನೆ.
ಅವನು ಮುಂಜಾನೆಯಲ್ಲಿ ಕೊಂದು ತಿನ್ನುವನು. ಅವನು
ಸಾಯಂಕಾಲ ಮಿಕ್ಕುಳಿದುದ್ದನ್ನು ಹಂಚಿಕೊಳ್ಳುವನು.’’
[28]ಇವು ಇಸ್ರೇಲಿನ ಹನ್ನೆರಡು ಕುಲಗಳು. ಈ ವಿಷಯ
ಗಳನ್ನೆಲ್ಲ ಅವರ ತಂದೆಯಾದ ಇಸ್ರೇಲನು ಅವರಿಗೆ
ಹೇಳಿದನು. ಅವನು ತನ್ನ ಪ್ರತಿಯೊಬ್ಬ ಗಂಡುಮಗನಿಗೂ
ಅವನಿಗೆ ತಕ್ಕ ಆಶೀರ್ವಾದವನ್ನು ಕೊಟ್ಟನು. [29]ಬಳಿಕ
ಇಸ್ರೇಲನು ಅವರಿಗೆ ಈ ಆಜ್ಞೆಯನ್ನು ಕೊಟ್ಟನು: ‘‘ನಾನು
ಸತ್ತಾಗ, ನನ್ನ ಪೂರ್ವಿಕರ ಸಂಗಡವಿರಲು ಇಷ್ಟ
ಪಡುತ್ತೇನೆ. ನನ್ನ ಪೂರ್ವಿಕರಿಗೆ ಸಮಾಧಿ ಮಾಡಿರುವ
ಹಿತ್ತಿಯನಾದ ಎಫ್ರೋನನ ಗವಿಯಲ್ಲಿ ನನಗೆ ಸಮಾಧಿ
ಮಾಡಬೇಕು. [30]ಆ ಗವಿಯು ಕಾನಾನ್ ದೇಶದ ಮಮ್ರೆಗೆ
ಎದುರಾಗಿರುವ ಮಕ್ಪೇಲ ಎಂಬ ಬಯಲಿನಲ್ಲಿದೆ.
ಅಬ್ರಹಾಮನು ತನ್ನ ಸಮಾಧಿಗಾಗಿ ಈ ಸ್ಥಳವನ್ನು
ಎಫ್ರೋನನಿಂದ ಕೊಂಡುಕೊಂಡನು. [31]ಅಬ್ರಹಾಮ
ನನ್ನು ಮತ್ತು ಅವನ ಹೆಂಡತಿಯಾದ ಸಾರಳನ್ನು ಆ ಗವಿ
ಯಲ್ಲಿ ಸಮಾಧಿ ಮಾಡಲಾಗಿದೆ. ಇಸಾಕನನ್ನು ಮತ್ತು
ರೆಬೆಕ್ಕಳನ್ನು ಅಲ್ಲಿ ಸಮಾಧಿ ಮಾಡಲಾಗಿದೆ. ನನ್ನ ಹೆಂಡತಿ
ಯಾದ ಲೇಯಾಳನ್ನು ನಾನು ಅಲ್ಲಿ ಸಮಾಧಿ ಮಾಡಿದ್ದೇನೆ.
[32]ಆ ಗುಹೆಯನ್ನು ಮತ್ತು ಈ ಗುಹೆಯಿರುವ ಹೊಲವನ್ನು
ಹಿತ್ತಿಯರಿಂದ ಕೊಂಡುಕೊಳ್ಳಲಾಗಿದೆ’’ ಎಂದು ಹೇಳಿ
ದನು. [33]ಯಾಕೋಬನು ತನ್ನ ಗಂಡುಮಕ್ಕಳೊಂದಿಗೆ
ಮಾತನಾಡಿದ ಮೇಲೆ ತನ್ನ ಹಾಸಿಗೆಯ ಮೇಲೆ
ಕಾಲುಗಳನ್ನು ಮುದುರಿಕೊಂಡು ಪ್ರಾಣಬಿಟ್ಟನು.

### ಯಾಕೋಬನ ಅಂತ್ಯಕ್ರಿಯೆ

50 ಇಸ್ರೇಲನು ಸತ್ತಾಗ ಯೋಸೇಫನು ತುಂಬ
ದುಃಖಿಸಿದನು. ಅವನು ತನ್ನ ತಂದೆಯನ್ನು ಅಪ್ಪಿ
ಕೊಂಡು ಗೋಳಾಡಿ ಮುದ್ದಿಟ್ಟನು. [2]ಯೋಸೇಫನು ತನ್ನ
ತಂದೆಯ ಶವವನ್ನು ಸಿದ್ಧಪಡಿಸಲು ತನ್ನ ಸೇವಕರಿಗೆ ಹೇಳಿ
ದನು. (ಈ ಸೇವಕರು ವೈದ್ಯರಾಗಿದ್ದರು.) ಆ ವೈದ್ಯರು
ಯಾಕೋಬನ ಶರೀರವನ್ನು ಸಮಾಧಿಮಾಡಲು ಸಿದ್ಧ
ಪಡಿಸಿದರು. [3]ಈಜಿಪ್ಟಿನವರು ಆ ಶರೀರವನ್ನು ವಿಶೇಷ
ವಾದ ರೀತಿಯಲ್ಲಿ ನಲವತ್ತು ದಿನಗಳವರೆಗೆ ಸಿದ್ಧ
ಪಡಿಸಿದರು. ಬಳಿಕ ಈಜಿಪ್ಟಿನವರು ಯಾಕೋಬನಿಗಾಗಿ
ಎಪ್ಪತ್ತು ದಿನಗಳವರೆಗೆ ಗೋಳಾಡಿದರು.
[4]ಎಪ್ಪತ್ತು ದಿನಗಳಾದ ಮೇಲೆ ಯೋಸೇಫನು
ಫರೋಹನ ಅಧಿಕಾರಿಗಳಿಗೆ, ‘‘ದಯವಿಟ್ಟು ಇದನ್ನು
ಫರೋಹನಿಗೆ ತಿಳಿಸಿರಿ. [5]‘ನನ್ನ ತಂದೆಯು ಸಾಯುವಾಗ
ನಾನು ಅವನಿಗೆ ಒಂದು ಪ್ರಮಾಣವನ್ನು ಮಾಡಿದೆನು.
ಕಾನಾನ್ ದೇಶದಲ್ಲಿ ಒಂದು ಗುಹೆಯನ್ನು ಅವನು

ತನಗಾಗಿ ಸಿದ್ಧಪಡಿಸಿಕೊಂಡಿದ್ದಾನೆ. ಆದ್ದರಿಂದ, ನಾನು
ಹೋಗಿ ನನ್ನ ತಂದೆಯನ್ನು ಸಮಾಧಿಮಾಡಿ ಮತ್ತೆ
ಹಿಂತಿರುಗಿ ನಿಮ್ಮ ಬಳಿಗೆ ಬರಲು ದಯವಿಟ್ಟು ಅವಕಾಶ
ಕೊಡಿ' ಎಂದು ತಿಳಿಸಿರಿ'' ಎಂಬುದಾಗಿ ಹೇಳಿದನು.
6ಫರೋಹನು, ''ನಿನ್ನ ಪ್ರಮಾಣವನ್ನು ಉಳಿಸಿಕೋ.
ಹೋಗಿ ನಿನ್ನ ತಂದೆಯನ್ನು ಸಮಾಧಿಮಾಡು'' ಎಂದು
ಉತ್ತರಿಸಿದನು.

7ಆದ್ದರಿಂದ ಯೋಸೇಫನು ತನ್ನ ತಂದೆಯನ್ನು ಸಮಾಧಿ
ಮಾಡಲು ಹೋದನು. ಫರೋಹನ ಎಲ್ಲಾ ಅಧಿಕಾರಿಗಳು
ಯೋಸೇಫನೊಂದಿಗೆ ಹೋದರು. ಫರೋಹನ ನಾಯ
ಕರು ಮತ್ತು ಈಜಿಪ್ಟಿನ ಎಲ್ಲಾ ಹಿರಿಯರು ಯೋಸೇಫ
ನೊಂದಿಗೆ ಹೋದರು. 8ಯೋಸೇಫನ ಕುಟುಂಬದಲ್ಲಿದ್ದ
ಜನರು ಮತ್ತು ಅವನ ಸಹೋದರರು ಅವನೊಂದಿಗೆ
ಹೋದರು. ಅವನ ತಂದೆಯ ಕುಟುಂಬದವರೆಲ್ಲ
ಯೋಸೇಫನೊಂದಿಗೆ ಹೋದರು. (ಮಕ್ಕಳು ಮತ್ತು
ಪ್ರಾಣಿಗಳು ಮಾತ್ರ ಗೋಷೆನ್ ಪ್ರಾಂತ್ಯದಲ್ಲಿ ಉಳಿದು
ಕೊಂಡರು.) 9ಗಂಡಸರು ಯೋಸೇಫನೊಂದಿಗೆ ರಥ
ಗಳಲ್ಲಿ ಮತ್ತು ಕುದುರೆಗಳ ಮೇಲೆ ಹೋದರು. ಅದು
ಬಹಳ ದೊಡ್ಡ ಗುಂಪಾಗಿತ್ತು.

10ಅವರು ಗೋರೆನ್ ಅಟಾದ್ ಎಂಬಲ್ಲಿಗೆ ಬಂದರು.
ಅದು ಜೋರ್ಡನ್ ನದಿಯ ಪೂರ್ವದಲ್ಲಿತ್ತು. ಆ ಸ್ಥಳ
ದಲ್ಲಿ ಅವರು ತುಂಬ ಸಮಯದವರೆಗೆ ಶೋಕಿಸಿದರು.
ಆ ಶೋಕವು ಏಳು ದಿನಗಳವರೆಗೆ ಮುಂದುವರೆಯಿತು.
11ಕಾನಾನಿನ ಜನರು ಗೋರೆನ್‌ಅಟಾದ್‌ನಲ್ಲಿ ಶೋಕಿಸು
ತ್ತಿರುವುದನ್ನು ನೋಡಿ, ''ಈಜಿಪ್ಟಿನವರು ಬಹಳ ದುಃಖ
ಕರವಾದ ಅಂತ್ಯಕ್ರಿಯೆಯನ್ನು ಮಾಡುತ್ತಿದ್ದಾರೆ'' ಎಂದು
ಹೇಳಿದರು. ಆದ್ದರಿಂದ ಆ ಸ್ಥಳಕ್ಕೆ ಅಬೇಲ್
ಮಿಚ್ರಯೀಮ್ * ಎಂದು ಹೆಸರಾಯಿತು.

12ಹೀಗೆ ಯಾಕೋಬನ ಗಂಡುಮಕ್ಕಳು ತಮ್ಮ
ತಂದೆಯ ಆಜ್ಞೆಯಂತೆ ಮಾಡಿದರು.

13ಅವರು ಅವನ ಶರೀರವನ್ನು ಕಾನಾನ್ ದೇಶಕ್ಕೆ
ತೆಗೆದುಕೊಂಡು ಹೋಗಿ ಮಕ್ಪೇಲದಲ್ಲಿದ್ದ ಗವಿಯಲ್ಲಿ
ಸಮಾಧಿ ಮಾಡಿದರು. ಮಮ್ರೆಯ ಬಯಲಿನಲ್ಲಿದ್ದ ಈ
ಗವಿಯನ್ನು ಅಬ್ರಹಾಮನು ಹಿತ್ತಿಯನಾದ ಎಫ್ರೋನ
ನಿಂದ ಸಮಾಧಿಯ ಸ್ಥಳಕ್ಕಾಗಿ ಕೊಂಡುಕೊಂಡಿದ್ದನು.

14ತಂದೆಯನ್ನು ಸಮಾಧಿ ಮಾಡಿದ ನಂತರ
ಯೋಸೇಫನೂ ಅವನ ಅಣ್ಣ ತಮ್ಮಂದಿರೂ ಅವನ
ತಂದೆಯ ಉತ್ತರಕ್ರಿಯೆಗಾಗಿ ಅವ ನೊಂದಿಗೆ ಹೋಗಿದ್ದ
ವರೆಲ್ಲರೂ ಈಜಿಪ್ಟಿಗೆ ಹಿಂತಿರುಗಿದರು.

## ಸಹೋದರರು ಯೋಸೇಫನಿಗೆ ಭಯಪಟ್ಟರು

15ಯಾಕೋಬನು ಸತ್ತ ಮೇಲೆ, ಯೋಸೇಫನ
ಸಹೋದರರು ಕಳವಳಗೊಂಡರು. ಅವರು ''ನಾವು
ಮಾಡಿದ ಕಾರ್ಯಕ್ಕೆ ಯೋಸೇಫನು ಇನ್ನು ಮೇಲೆ
ನಮ್ಮನ್ನು ದ್ವೇಷಿಸುವನೇ?'' ಎಂದು ಮಾತಾಡಿ
ಕೊಂಡರು. 16ಆದ್ದರಿಂದ ಸಹೋದರರು ಯೋಸೇಫನಿಗೆ
ಈ ಸಂದೇಶವನ್ನು ಕಳುಹಿಸಿದರು:

ನಿನ್ನ ತಂದೆ ಸಾಯುವ ಮೊದಲು ನಮಗೆ ಆಜ್ಞಾಪಿಸಿ
ದ್ದೇನಂದರೆ, 17'ನೀವು ಯೋಸೇಫನಿಗೆ, ಈ ಸಂದೇಶ
ವನ್ನು ಕೊಡಬೇಕು, 'ನಾವು ಮಾಡಿದ್ದು ಕೆಟ್ಟಕಾರ್ಯವೇ
ನಿಜ. ಅದಕ್ಕಾಗಿ ನೀನು ಅವರನ್ನು ಕ್ಷಮಿಸಬೇಕೆಂದು
ನಿನ್ನನ್ನು ಬೇಡಿಕೊಳ್ಳುತ್ತಿದ್ದೇನೆ.' ಆದುದರಿಂದ ನೀನು
ನಾವು ಮಾಡಿದ ಕೆಟ್ಟಕಾರ್ಯಕ್ಕಾಗಿ ಕ್ಷಮಿಸಬೇಕು. ನಾವು
ನಿನ್ನ ತಂದೆಯ ದೇವರಿಗೆ ಸೇವಕರಾಗಿದ್ದೇವೆ ಎಂದು
ಹೇಳಿದರು.

ಈ ವಿಷಯಗಳನ್ನು ಕೇಳಿ ಅವನು ದುಃಖದಿಂದ ಅತ್ತನು.
18ಸಹೋದರರು ಯೋಸೇಫನ ಬಳಿಗೆ ಹೋಗಿ ಅವನ
ಮುಂದೆ ಅಡ್ಡಬಿದ್ದು, ''ನಾವು ನಿನ್ನ ಸೇವಕರಾಗಿದ್ದೇವೆ''
ಎಂದು ಹೇಳಿದರು.

19ಆಗ ಯೋಸೇಫನು ಅವರಿಗೆ, ''ಭಯಪಡಬೇಡಿ.
ನಾನು ದೇವರಲ್ಲ; ನಿಮ್ಮನ್ನು ಶಿಕ್ಷಿಸಲು ನನಗೆ ಅಧಿಕಾರ
ವಿಲ್ಲ. 20ನೀವು ನನಗೆ ಕೇಡು ಮಾಡಲು ಯೋಚಿಸಿದಿರಿ.
ಆದರೆ ದೇವರು ಒಳ್ಳೆಯದನ್ನೇ ಮಾಡಿದನು. ಬಹಳ
ಜನರ ಪ್ರಾಣವನ್ನುಉಳಿಸುವುದಕ್ಕಾಗಿ ನನ್ನನ್ನು ಬಳಸಿ
ಕೊಳ್ಳುವುದು ದೇವರ ಯೋಜನೆಯಾಗಿತ್ತು. ಈಗಲೂ
ಆತನದು ಅದೇ ಯೋಜನೆ.

21ಆದ್ದರಿಂದ ಭಯ ಪಡದಿರಿ. ನಾನು ನಿಮ್ಮನ್ನೂ ನಿಮ್ಮ
ಮಕ್ಕಳನ್ನು ಪೋಷಿಸುತ್ತೇನೆ'' ಎಂದು ಹೇಳಿದನು.
ಯೋಸೇಫನು ತನ್ನ ಸಹೋದರರೊಂದಿಗೆ ಸೌಮ್ಯವಾಗಿ
ಮಾತನಾಡಿದ್ದರಿಂದ ಅವರಿಗೆ ತುಂಬ ಸಂತೋಷ
ವಾಯಿತು.

22ಯೋಸೇಫನು ತನ್ನ ತಂದೆಯ ಕುಟುಂಬದವ
ರೊಂದಿಗೆ ಈಜಿಪ್ಟಿನಲ್ಲೇ ವಾಸವಾಗಿದ್ದನು. ಯೋಸೇಫನು
ತನ್ನ ನೂರಹತ್ತನೆಯ ವರ್ಷದಲ್ಲಿ ತೀರಿಕೊಂಡನು.
23ಯೋಸೇಫನು ಜೀವದಿಂದಿದ್ದ ಕಾಲದಲ್ಲಿ, ಎಫ್ರಾಯೀ
ಮನು ಮಕ್ಕಳನ್ನೂ ಮೊಮ್ಮಕ್ಕಳನ್ನೂ ಪಡೆದನು. ಅವನ
ಮಗನಾದ ಮನಸ್ಸೆಗೆ ಮಾಕೀರನೆಂಬ ಗಂಡು ಮಗನು
ಹುಟ್ಟಿದನು. ಯೋಸೇಫನು ಮಾಕೀರನ ಮಕ್ಕಳನ್ನು
ನೋಡಿದನು.

24ಯೋಸೇಫನಿಗೆ ಸಾವು ಸಮೀಪಿಸಿದಾಗ ಅವನು ತನ್ನ
ಸಹೋದರರಿಗೆ, ''ನಾನು ಸಾಯುವಕಾಲ ಸಮೀಪಿಸಿದೆ.
ಆದರೆ ನಿಮ್ಮನ್ನು ಪೋಷಿಸುವವನು ದೇವರೆಂಬುದು

---

**ಅಬೇಲ್ ಮಿಚ್ರಯೀಮ್** ಇದರರ್ಥ: ''ಈಜಿಪ್ಟಿನ ದುಃಖದ ಸಮಯ.''

ನಿಮಗೆ ತಿಳಿದಿರಲಿ. ಆತನು ಈ ದೇಶದಿಂದ ನಿಮ್ಮನ್ನು
ಕರೆದುಕೊಂಡು ಹೋಗಿ ಅಬ್ರಹಾಮನಿಗೂ ಇಸಾಕ
ನಿಗೂ ಮತ್ತು ಯಾಕೋಬನಿಗೂ ವಾಗ್ದಾನ ಮಾಡಿದ್ದ
ದೇಶವನ್ನು ಕೊಡುವನು'' ಎಂದು ಹೇಳಿದನು. [25]ಆಗ
ಯೋಸೇಫನು ತನ್ನ ಜನರಿಗೆ ಪ್ರಮಾಣ ಮಾಡಬೇಕೆಂದು
ಕೇಳಿಕೊಂಡನು. ಯೋಸೇಫನು, ``ದೇವರು ನಿಮ್ಮನ್ನು
ಈ ದೇಶದಿಂದ ಹೊರಗೆ ನಡೆಸಿದಾಗ ನನ್ನ ಮೂಳೆಗಳನ್ನು
ನಿಮ್ಮೊಂದಿಗೆ ತೆಗೆದುಕೊಂಡು ಹೋಗುವಿರೆಂದು ನೀವು
ಪ್ರಮಾಣ ಮಾಡಿ'' ಎಂದು ಹೇಳಿದನು. [26]ಯೋಸೇಫನು
ನೂರಹತ್ತನೆಯ ವರ್ಷದವನಾಗಿದ್ದಾಗ ಸತ್ತುಹೋದನು.
ಈಜಿಪ್ಟಿನಲ್ಲಿ ವೈದ್ಯರು ಅವನ ಶರೀರವನ್ನು ಸಮಾಧಿ
ಮಾಡಲು ಸಿದ್ಧಪಡಿಸಿ, ಶವಪೆಟ್ಟಿಗೆಯಲ್ಲಿ ಹಾಕಿದರು.

# ವಿಮೋಚನಕಾಂಡ

## ಈಜಿಪ್ಟಿನಲ್ಲಿ ಯಾಕೋಬನ ಕುಟುಂಬ

1 ಯಾಕೋಬನು (ಇಸ್ರೇಲನು) ತನ್ನ ಗಂಡು ಮಕ್ಕ
ಳೊಂದಿಗೆ ಈಜಿಪ್ಟಿಗೆ ಪ್ರಯಾಣ ಮಾಡಿದನು; ತಮ್ಮ
ಕುಟುಂಬಗಳೊಡನೆ ಹೋದ ಅವನ ಗಂಡುಮಕ್ಕಳು
ಯಾರಂದರೆ: 2ರೂಬೇನ್, ಸಿಮೆಯೋನ್, ಲೇವಿ,
ಯೆಹೂದ, 3ಇಸ್ಸಾಕಾರ್, ಜೆಬುಲೂನ್,
ಬೆನ್ಯಾಮೀನ್, 4ದಾನ್, ನಫ್ತಾಲಿ, ಗಾದ್ ಮತ್ತು
ಅಶೇರ್. 5ಯಾಕೋಬನ ಸಂತತಿಯವರಲ್ಲಿ ಒಟ್ಟು
ಎಪ್ಪತ್ತು ಮಂದಿ ಇದ್ದರು. (ಯಾಕೋಬನ ಹನ್ನೆರಡು
ಮಂದಿ ಗಂಡುಮಕ್ಕಳಲ್ಲಿ ಒಬ್ಬನಾದ ಯೋಸೇಫನು
ಮೊದಲೇ ಈಜಿಪ್ಟಿನಲ್ಲಿದ್ದನು.)
6ಬಳಿಕ ಯೋಸೇಫನೂ ಅವನ ಸಹೋದರರೂ ಮತ್ತು
ಆ ತಲೆಮಾರಿನ ಜನರೆಲ್ಲರೂ ಸತ್ತು ಹೋದರು. 7ಆದರೆ
ಇಸ್ರೇಲರಿಗೆ ಅನೇಕ ಮಕ್ಕಳಿದ್ದರು; ಅವರ ಸಂಖ್ಯೆಯು
ಹೆಚ್ಚಾಗತೊಡಗಿತು. ಇಸ್ರೇಲರು ಬಲಗೊಂಡರು;
ಈಜಿಪ್ಟಿನಲ್ಲೆಲ್ಲಾ ತುಂಬಿಕೊಂಡರು.

## ಇಸ್ರೇಲರಿಗೆ ಹಿಂಸೆ

8ಬಳಿಕ ಒಬ್ಬ ಹೊಸ ರಾಜನು ಈಜಿಪ್ಟನ್ನು ಆಳ
ತೊಡಗಿದನು. ಈ ರಾಜನಿಗೆ ಯೋಸೇಫನ ವಿಷಯವಾಗಿ
ತಿಳಿದಿರಲಿಲ್ಲ. 9ಈ ರಾಜನು ತನ್ನ ಜನರಿಗೆ, ‘‘ಇಸ್ರೇಲರ
ಸಂಖ್ಯೆಯು ಹೆಚ್ಚಾಯಿತು; ಅವರು ನಮಗಿಂತಲೂ ಬಲಿಷ್ಠ
ರಾದರು. 10ಯುದ್ಧವೇನಾದರೂ ಸಂಭವಿಸಿದರೆ, ಇಸ್ರೇ
ಲರು ನಮ್ಮ ವೈರಿಗಳೊಡನೆ ಸೇರಿಕೊಂಡು ನಮ್ಮನ್ನು
ಸೋಲಿಸಿ ನಮ್ಮಿಂದ ತಪ್ಪಿಸಿಕೊಳ್ಳಬಹುದು. ಆದ್ದರಿಂದ
ಅವರು ಅಭಿವೃದ್ಧಿಯಾಗದಂತೆ ನಾವು ಉಪಾಯವನ್ನು
ಮಾಡೋಣ’’ ಎಂದು ಹೇಳಿದನು.
11ಆದ್ದರಿಂದ ಅವರು ಇಸ್ರೇಲರನ್ನು ಹಿಂಸಿಸಲು
ತೀರ್ಮಾನಿಸಿದರು. ಇಸ್ರೇಲರಿಂದ ಬಿಟ್ಟಿಕೆಲಸ ಮಾಡಿಸು
ವುಕ್ಕಾಗಿ ಅಧಿಕಾರಿಗಳನ್ನು ನೇಮಿಸಿದರು. ಈ ಅಧಿಕಾರಿ
ಗಳು ರಾಜನಿಗಾಗಿ ಪಿತೋಮ್ ಮತ್ತು ರಾಮ್ಸೇಸ್
ಪಟ್ಟಣಗಳನ್ನು ಇಸ್ರೇಲರಿಂದ ಬಲವಂತವಾಗಿ
ಕಟ್ಟಿಸಿದರು; ಧಾನ್ಯಗಳನ್ನು ಮತ್ತು ಇನ್ನಿತರ ವಸ್ತುಗಳನ್ನು
ಶೇಖರಿಸುವುದಕ್ಕೆ ರಾಜನು ಈ ಪಟ್ಟಣಗಳನ್ನು ಉಪ
ಯೋಗಿಸಿದನು.
12ಈಜಿಪ್ಟಿನವರು ಇಸ್ರೇಲರಿಂದ ಪ್ರಯಾಸಕರವಾದ
ಕೆಲಸಗಳನ್ನು ಬಲವಂತವಾಗಿ ಮಾಡಿಸಿದಷ್ಟೂ ಇಸ್ರೇಲರು
ಹೆಚ್ಚಿ ಹರಡಿಕೊಂಡದ್ದರಿಂದ ಈಜಿಪ್ಟಿನ ಜನರು
ಇಸ್ರೇಲರಿಗೆ ಹೆಚ್ಚೆಚ್ಚಾಗಿ ಭಯಪಟ್ಟರು. 13ಅಲ್ಲದೆ ಇನ್ನೂ
ಪ್ರಯಾಸಕರವಾದ ಕೆಲಸವನ್ನು ಬಲವಂತದಿಂದ
ಮಾಡಿಸಿಕೊಂಡರು.
14ಈಜಿಪ್ಟಿನವರು ಇಸ್ರೇಲರ ಜೀವಿತವನ್ನು ಕಷ್ಟಕರವ
ನ್ನಾಗಿ ಮಾಡಿದರು. ಇಸ್ರೇಲರಿಂದ ಇಟ್ಟಿಗೆಗಳನ್ನೂ ಗಾರೆ
ಗಳನ್ನೂ ಬೇಸಾಯವನ್ನೂ ಪ್ರತಿಯೊಂದು ಕೆಲಸವನ್ನು
ಬಲವಂತವಾಗಿ ಮಾಡಿಸಿಕೊಂಡರು.

## ದೇವರನ್ನು ಹಿಂಬಾಲಿಸಿದ ದಾದಿಯರು

15ಇಸ್ರೇಲಿನ ಸ್ತ್ರೀಯರಿಗೆ ಹೆರಿಗೆ ಮಾಡಿಸಲು ಇಬ್ರಿಯ
ರಾದ ಇಬ್ಬರು ದಾದಿಯರಿದ್ದರು. ಇವರ ಹೆಸರು: ಶಿಫ್ರಾ
ಮತ್ತು ಪೂಗಾ. ಈಜಿಪ್ಟಿನ ರಾಜನು ಈ ದಾದಿಯರೊಡನೆ
ಮಾತಾಡಿ ಅವರಿಗೆ, 16‘‘ಇಬ್ರಿಯ ಸ್ತ್ರೀಯರಿಗೆ ನೀವು
ಹೆರಿಗೆ ಮಾಡುವಾಗ ಹೆಣ್ಣುಮಗು ಹುಟ್ಟಿದರೆ, ಅದನ್ನು
ಉಳಿಸಿರಿ; ಗಂಡು ಹುಟ್ಟಿದರೆ ಸಾಯಿಸಿರಿ!’’ ಎಂದು
ಹೇಳಿದನು.
17ಆದರೆ ಆ ದಾದಿಯರಿಗೆ ದೇವರಲ್ಲಿ ಭಯಭಕ್ತಿ ಇದ್ದ
ಕಾರಣ ಅವರು ರಾಜನ ಆಜ್ಞೆಗೆ ವಿಧೇಯರಾಗದೆ ಗಂಡು
ಮಕ್ಕಳನ್ನೂ ಉಳಿಸಿದರು.
18ಈಜಿಪ್ಟಿನ ರಾಜನು ದಾದಿಯರನ್ನು ಕರೆದು, ‘‘ನೀವು
ಹೀಗೇಕೆ ಮಾಡುತ್ತಿದ್ದೀರಿ? ಗಂಡುಮಕ್ಕಳನ್ನು ನೀವು
ಉಳಿಸುತ್ತಿರುವುದೇಕೆ?’’ ಎಂದು ಕೇಳಿದನು.
19ದಾದಿಯರು, ‘‘ಇಬ್ರಿಯ ಸ್ತ್ರೀಯರು ಈಜಿಪ್ಟಿನ
ಸ್ತ್ರೀಯರಿಗಿಂತ ಚುರುಕಾಗಿದ್ದಾರೆ. ನಾವು ಅವರಿಗೆ
ಸಹಾಯಮಾಡುವುದಕ್ಕಿಂತ ಮೊದಲೇ ಅವರು ಹೆರು
ತ್ತಾರೆ’’ ಎಂದು ಹೇಳಿದರು. 20-21(ಈ ದಾದಿಯರು
ದೇವರಲ್ಲಿ ಭಯಭಕ್ತಿ ಉಳ್ಳವರಾಗಿದ್ದ ಕಾರಣ ಆತನು
ಅವರನ್ನೂ ಅವರ ಕುಟುಂಬಗಳನ್ನೂ ಅಭಿವೃದ್ಧಿ

ಪಡಿಸಿದನು. ಇದಲ್ಲದೆ ಇಸ್ರೇಲರ ಸಂಖ್ಯೆಯು ಅಧಿಕವಾಗಿ
ಬೆಳೆಯತೊಡಗಿತು.)
22ಆದ್ದರಿಂದ ಫರೋಹನು ತನ್ನ ಜನರಿಗೆಲ್ಲಾ “ಇಬ್ರಿ
ಯರಿಗೆ ಹುಟ್ಟುವ ಗಂಡುಕೂಸುಗಳನ್ನೆಲ್ಲಾ ನೈಲ್ ನದಿಗೆ
ಎಸೆದುಬಿಡಬೇಕು. ಆದರೆ ಎಲ್ಲಾ ಹೆಣ್ಣು ಮಕ್ಕಳು
ಬದುಕಲಿ” ಎಂದು ಆಜ್ಞಾಪಿಸಿದನು.

## ಮೋಶೆಯ ಬಾಲ್ಯ

2 ಲೇವಿ ಕುಟುಂಬದ ಒಬ್ಬನು ಲೇವಿ ಕುಟುಂಬಕ್ಕೆ
ಸೇರಿದ ಸ್ತ್ರೀಯೊಬ್ಬಳನ್ನು ಮದುವೆಯಾದನು. 2ಆ
ಸ್ತ್ರೀಯು ಗರ್ಭಿಣಿಯಾಗಿ ಗಂಡುಮಗುವಿಗೆ ಜನ್ಮವಿತ್ತಳು.
ಮಗುವು ಸುಂದರವಾಗಿತ್ತು. ಆಕೆ ಮೂರು ತಿಂಗಳವರೆಗೆ
ಆ ಮಗುವನ್ನು ಬಚ್ಚಿಟ್ಟಳು. 3ಇನ್ನೂ ಹೆಚ್ಚು ಕಾಲ ಬಚ್ಚಿ
ಡಲಾಗದೆ ಆಕೆ ಒಂದು ಬುಟ್ಟಿಯನ್ನು ಮಾಡಿ ಅದಕ್ಕೆ ರಾಳ
ವನ್ನು ಹಚ್ಚಿದಳು. ಆಕೆ ಮಗುವನ್ನು ಬುಟ್ಟಿಯಲ್ಲಿಟ್ಟು ಆ
ಬುಟ್ಟಿಯನ್ನು ನೀರಿನಲ್ಲಿ ಎತ್ತರವಾಗಿ ಬೆಳದ ಹುಲ್ಲಿನಲ್ಲಿ
ಇಟ್ಟಳು. 4ಮಗುವಿಗೆ ಏನಾಗುವುದೊ ಎಂದು ನೋಡಲು
ಮಗುವಿನ ಅಕ್ಕ ಅಲ್ಲಿದ್ದುಕೊಂಡು ಕಾಯುತ್ತಿದಳು.
5ಅದೇ ಸಮಯದಲ್ಲಿ ಫರೋಹನ ಮಗಳು ಸ್ನಾನ
ಮಾಡುವುದಕ್ಕೆ ನದಿಗೆ ಹೋದಳು. ಆಕೆಯ ಸೇವಕಿಯರು
ನದಿಯ ದಡದಲ್ಲಿ ತಿರುಗಾಡುತ್ತಿದ್ದರು. ಆಕೆ ಎತ್ತರವಾದ
ಹುಲ್ಲಿನ ಮೇಲಿದ್ದ ಬುಟ್ಟಿಯನ್ನು ನೋಡಿ ತನ್ನ ಸೇವಕಿ
ಯರಲ್ಲಿ ಒಬ್ಬಳಿಗೆ, “ಹೋಗಿ ಅದನ್ನು ತೆಗೆದುಕೊಂಡು
ಬಾ” ಎಂದು ಹೇಳಿದಳು. 6ರಾಜನ ಮಗಳು ಬುಟ್ಟಿಯನ್ನು
ತೆಗೆದು ನೋಡಿದಾಗ ಅಳುತ್ತಿದ್ದ ಗಂಡು ಮಗುವನ್ನು
ಕಂಡಳು. ಆಕೆಗೆ ಅದರ ಮೇಲೆ ಮರುಕವಾಯಿತು. ಆಕೆ,
“ಇದು ಇಬ್ರಿಯರ ಮಗು” ಎಂದು ಹೇಳಿದಳು.
7ಮಗುವಿನ ಅಕ್ಕ ಆಕೆಯ ಬಳಿಗೆ ಬಂದು, “ಮಗುವಿಗೆ
ಹಾಲು ಕುಡಿಸಲು ಒಬ್ಬ ಇಬ್ರಿಯ ಸ್ತ್ರೀಯನ್ನು ಕರೆದು
ಕೊಂಡು ಬರಲೇ?” ಎಂದು ಕೇಳಿದಳು.
8ಅರಸನ ಮಗಳು, “ಹೋಗಿ, ಕರೆದುಕೊಂಡು ಬಾ”
ಅಂದಳು.
ಆದ್ದರಿಂದ ಆ ಹುಡುಗಿ ಹೋಗಿ ಮಗುವಿನ ಸ್ವಂತ
ತಾಯಿಯನ್ನು ಕರೆದುಕೊಂಡು ಬಂದಳು.
9ರಾಜನ ಮಗಳು ತಾಯಿಗೆ, “ಈ ಮಗುವಿಗೆ ಹಾಲು
ಕುಡಿಸಿ ನೋಡಿಕೋ, ನಾನು ನಿನಗೆ ಸಂಬಳ ಕೊಡು
ವೆನು” ಎಂದು ಹೇಳಿದಳು.
ಆದ್ದರಿಂದ ಆ ಸ್ತ್ರೀ ತನ್ನ ಮಗುವನ್ನು ತೆಗೆದುಕೊಂಡು
ಸಾಕಿದಳು.
10ಮಗುವು ಬೆಳೆಯಿತು. ಸ್ವಲ್ಪ ಕಾಲದ ನಂತರ ಆ
ಸ್ತ್ರೀಯು ಬಾಲಕನನ್ನು ರಾಜನ ಮಗಳ ಬಳಿಗೆ ಕರೆದು
ಕೊಂಡು ಬಂದಳು. ರಾಜನ ಮಗಳು ಆ ಮಗುವನ್ನು ತನ್ನ
ಸ್ವಂತ ಮಗನೆಂದು ಸ್ವೀಕರಿಸಿದಳು. ಆ ಮಗುವನ್ನು ನೀರಿ
ನೊಳಗಿಂದ ಎಳೆದೆನೆಂದು ಆ ಬಾಲಕನಿಗೆ “ಮೋಶೆ”
ಎಂದು ಹೆಸರಿಟ್ಟಳು.

## ಮೋಶೆ ತನ್ನ ಜನರಿಗೆ ಸಹಾಯ ಮಾಡಿದ್ದು

11ಮೋಶೆಯು ಬೆಳೆದು ದೊಡ್ಡವನಾದನು. ತನ್ನ ಜನ
ರಾದ ಇಬ್ರಿಯರು ಬಲವಂತಕ್ಕೊಳಗಾಗಿ ಪ್ರಯಾಸಕರ
ವಾದ ಬಿಟ್ಟಿಕೆಲಸಗಳನ್ನು ಮಾಡುವುದನ್ನು ನೋಡಿದನು.
ಒಂದು ದಿನ ಈಜಿಪ್ಟಿನವನೊಬ್ಬನು ಇಬ್ರಿಯನೊಬ್ಬನನ್ನು
ಹೊಡೆಯುವುದನ್ನು ಕಂಡ 12ಮೋಶೆಯು ಸುತ್ತಲೂ
ನೋಡಿ ಯಾರೂ ಗಮನಿಸುತ್ತಿಲ್ಲವೆಂದು ತಿಳಿದುಕೊಂಡು
ಈಜಿಪ್ಟಿನವನನ್ನು ಕೊಂದು ಮರಳಿನಲ್ಲಿ ಹೂಳಿಟ್ಟನು.
13ಮರುದಿನ, ಇಬ್ಬರು ಇಬ್ರಿಯರು ಜಗಳವಾಡುತ್ತಿರು
ವುದನ್ನು ಕಂಡ ಮೋಶೆಯು ಅವರಲ್ಲಿ ತಪ್ಪು ಮಾಡಿದ
ವನಿಗೆ, “ನಿನ್ನ ನೆರೆಯವನಿಗೆ ಯಾಕೆ ಹೊಡೆಯುತ್ತಿರುವೆ”
ಎಂದು ಕೇಳಿದನು.
14ಅದಕ್ಕೆ ಆ ಮನುಷ್ಯನು, “ನಿನ್ನನ್ನು ನಮ್ಮ ಅಧಿಕಾರಿ
ಯನ್ನಾಗಿಯೂ ನ್ಯಾಯಾಧಿಪತಿಯನ್ನಾಗಿಯೂ ಮಾಡಿದ
ವರು ಯಾರು? ನಿನ್ನೆ ಆ ಈಜಿಪ್ಟಿನವನನ್ನು ಕೊಂದಂತೆ
ನನ್ನನ್ನೂ ಕೊಲ್ಲಬೇಕೆಂದಿರುವಿಯೋ?” ಎಂದು
ಉತ್ತರಿಸಿದನು.
ಆಗ ಮೋಶೆಗೆ ಭಯವಾಯಿತು. ಮೋಶೆಯು ತನ್ನೊ
ಳಗೆ, “ನಾನು ಮಾಡಿದ್ದು ಪ್ರತಿಯೊಬ್ಬರಿಗೂ ತಿಳಿದಿದೆ”
ಅಂದುಕೊಂಡನು.
15ಮೋಶೆಯು ಮಾಡಿದ್ದು ಫರೋಹನಿಗೂ ತಿಳಿ
ಯಿತು. ಆದ್ದರಿಂದ ಮೋಶೆಯನ್ನು ಕೊಲ್ಲಿಸಲು ಅವನು
ತಿರ್ಮಾನಿಸಿದನು. ಆದರೆ ಮೋಶೆ ಫರೋಹನಿಂದ
ಮಿದ್ಯಾನ್ ದೇಶಕ್ಕೆ ಓಡಿಹೋದನು.

## ಮಿದ್ಯಾನಿನಲ್ಲಿ ಮೋಶೆ

16ಮೋಶೆಯು ಮಿದ್ಯಾನ್ಯರ ಒಂದು ಬಾವಿಯ ಬಳಿ
ಕುಳಿತುಕೊಂಡಿದ್ದನು. ಮಿದ್ಯಾನ್ಯರ ಒಬ್ಬ ಪುರೋಹಿತ
ನಿಗೆ ಏಳು ಮಂದಿ ಹೆಣ್ಣುಮಕ್ಕಳಿದ್ದರು. ಆ ಹುಡುಗಿಯರು
ಬಂದು ತಮ್ಮ ತಂದೆಯ ಕುರಿಗಳಿಗೆ ನೀರನ್ನು ಕುಡಿಸಲು
ಬಾವಿಯಿಂದ ನೀರು ಸೇದಿ ತೊಟ್ಟಿಗಳಲ್ಲಿ ಹಾಕುತ್ತಿದ್ದರು.
17ಅಷ್ಟರಲ್ಲಿ ಅಲ್ಲಿಗೆ ಬಂದ ಕೆಲವು ಕುರುಬರು ನೀರು
ಸೇದಲು ಅವರಿಗೆ ಅಡ್ಡಿಮಾಡಿದ್ದರಿಂದ ಮೋಶೆಯು
ಅವರಿಗೆ ಸಹಾಯಕನಾಗಿ ಬಂದು ಅವರ ಕುರಿಗಳಿಗೆ
ನೀರು ಕುಡಿಸಿದನು.
18ಬಳಿಕ ಅವರು ತಮ್ಮ ತಂದೆಯಾದ ರೆಗೂವೇಲನ*
ಬಳಿಗೆ ಮರಳಿಹೋದರು. ಅವರ ತಂದೆ, “ಈ ದಿನ ನೀವು

---

**ರೆಗೂವೇಲ** ಅವನಿಗೆ ಇತ್ರೋವ ಎಂಬ ಹೆಸರೂ ಇದೆ.

ಬಹು ಬೇಗನೆ ಮನೆಗೆ ಬಂದಿದ್ದಿರಲ್ಲಾ!'' ಎಂದು
ಕೇಳಿದನು.
19ಆ ಹುಡುಗಿಯರು, ''ಕುರುಬರು ನಮಗೆ ಅಡ್ಡಿ
ಮಾಡಿದಾಗ ಈಜಿಪ್ಟಿನವನೊಬ್ಬನು ನಮ್ಮ ನೆರವಿಗೆ
ಬಂದು ನಮಗೂ ನಮ್ಮ ಕುರಿಗಳಿಗೂ ನೀರು ಕೊಟ್ಟನು''
ಎಂದು ಉತ್ತರಿಸಿದರು.
20ಅದಕ್ಕೆ ರೆಗೂವೇಲನು ತನ್ನ ಹೆಣ್ಣುಮಕ್ಕಳಿಗೆ, ''ಆ
ಮನುಷ್ಯನು ಎಲ್ಲಿದ್ದಾನೆ? ಅವನನ್ನು ನೀವು ಯಾಕೆ ಬಿಟ್ಟು
ಬಂದಿರಿ? ಅವನನ್ನು ಕರೆಯಿರಿ; ಅವನು ನಮ್ಮೊಂದಿಗೆ
ಊಟ ಮಾಡಲಿ'' ಎಂದು ಹೇಳಿದನು.
21ಮೋಶೆಯು ರೆಗೂವೇಲನೊಂದಿಗೆ ವಾಸಮಾಡಲು
ಇಷ್ಟಪಟ್ಟನು; ರೆಗೂವೇಲನು ತನ್ನ ಮಗಳಾದ ಚಿಪ್ಪೋರ
ಳನ್ನು ಮೋಶೆಗೆ ಮದುವೆ ಮಾಡಿಸಿದನು. 22ಚಿಪ್ಪೋರಳು
ಗಂಡುಮಗುವಿಗೆ ಜನ್ಮವಿತ್ತಳು. ಮೋಶೆಯು ಅನ್ಯದೇಶ
ದಲ್ಲಿ ಪ್ರವಾಸಿಯಾಗಿದ್ದ ಕಾರಣ ಆ ಮಗುವಿಗೆ
''ಗೇರ್ಷೋಮ್* '' ಎಂದು ಹೆಸರಿಟ್ಟನು.

### ಇಸ್ರೇಲರಿಗೆ ಸಹಾಯ ಮಾಡಲು ದೇವರ ನಿರ್ಧಾರ

23ಸ್ವಲ್ಪ ಕಾಲದ ಬಳಿಕ ಈಜಿಪ್ಟಿನ ರಾಜನೂ ಸತ್ತು
ಹೋದನು. ಇಸ್ರೇಲರು ತಾವು ಮಾಡಬೇಕಾದ
ಪ್ರಯಾಸಕರವಾದ ಬಿಟ್ಟಿಕೆಲಸದಿಂದ ನಿಟ್ಟುಸಿರುಬಿಡುತ್ತಾ
ಗೋಳಾಡುತ್ತಾ ಇದ್ದರು. ಅವರ ಗೋಳು ದೇವರಿಗೆ
ಮುಟ್ಟಿತು. 24ದೇವರು ಅವರ ನರಳಾಟವನ್ನು ಕೇಳಿ ತಾನು
ಅಬ್ರಹಾಮನೊಂದಿಗೂ ಇಸಾಕನೊಂದಿಗೂ
ಯಾಕೋಬನೊಂದಿಗೂ ಮಾಡಿದ ಒಡಂಬಡಿಕೆಯನ್ನು
ಜ್ಞಾಪಕಮಾಡಿಕೊಂಡನು. 25ದೇವರು ಇಸ್ರೇಲರ ಸಂಕಟ
ಗಳನ್ನು ನೋಡಿ ಅವರಿಗೆ ಸಹಾಯಮಾಡಲು ನಿಶ್ಚಯಿಸಿ
ಕೊಂಡನು.

### ಉರಿಯುವ ಪೊದೆ

3 ಮೋಶೆಯ ಮಾವನ ಹೆಸರು ಇತ್ರೋನನು.*
(ಇತ್ರೋನನು ಮಿದ್ಯಾನಿನ ಯಾಜಕನಾಗಿದ್ದನು.)
ಮೋಶೆಯು ಇತ್ರೋನನ ಕುರಿಗಳಿಗೆ ಕುರುಬನಾಗಿ
ದ್ದನು. ಒಂದು ದಿನ, ಮೋಶೆಯು ಕುರಿಗಳನ್ನು ಮರು
ಭೂಮಿಯ ಪಶ್ಚಿಮಭಾಗಕ್ಕೆ ನಡೆಸಿಕೊಂಡು ದೇವರ ಬೆಟ್ಟ
ವೆಂದು ಕರೆಯಲ್ಪಡುವ ಹೋರೇಬ್ (ಸಿನಾಯಿ) ಬೆಟ್ಟಕ್ಕೆ
ಹೋದನು. 2ಆ ಬೆಟ್ಟದಲ್ಲಿ ಯೆಹೋವನ ದೂತನು
ಮೋಶೆಗೆ ಉರಿಯುವ ಪೊದೆಯಲ್ಲಿ ಕಾಣಿಸಿಕೊಂಡನು.
ಪೊದೆಯು ಉರಿಯುತ್ತಿದ್ದರೂ ಸುಟ್ಟುಹೋಗದಿರುವು
ದನ್ನು ಮೋಶೆ ಗಮನಿಸಿದನು. 3ಪೊದೆಯು ಉರಿಯು
ತ್ತಿದ್ದರೂ ಸುಟ್ಟುಹೋಗದಿರುವುದಕ್ಕೆ ಕಾರಣವೇನೆಂದು
ತಿಳಿದುಕೊಳ್ಳಲು ಮೋಶೆಯು ಪೊದೆಯ ಸಮೀಪಕ್ಕೆ
ಹೋಗತೊಡಗಿದನು.
4ಮೋಶೆಯು ಪೊದೆಯನ್ನು ನೋಡಲು ಬರುತ್ತಿರು
ವುದನ್ನು ಯೆಹೋವನು ನೋಡಿದನು. ದೇವರು ಆ
ಪೊದೆಯೊಳಗಿಂದ, ''ಮೋಶೆ, ಮೋಶೆ!'' ಎಂದು
ಕರೆದನು.

ಅದಕ್ಕೆ ಮೋಶೆ, ''ಇಗೋ ಇದ್ದೇನೆ'' ಅಂದನು.
5ಆಗ ಯೆಹೋವನು, ''ಇನ್ನೂ ಹತ್ತಿರ ಬರಬೇಡ. ನಿನ್ನ
ಪಾದರಕ್ಷೆಗಳನ್ನು ತೆಗೆದುಹಾಕು. ಏಕೆಂದರೆ ನೀನು
ನಿಂತಿರುವ ಸ್ಥಳವು ಪರಿಶುದ್ಧ ಭೂಮಿಯಾಗಿದೆ. 6ನಾನು
ನಿನ್ನ ಪೂರ್ವಿಕರ ದೇವರು, ನಾನು ಅಬ್ರಹಾಮನ
ದೇವರು, ನಾನು ಇಸಾಕನ ದೇವರು, ನಾನು
ಯಾಕೋಬನ ದೇವರು'' ಎಂದು ಹೇಳಿದನು.

ದೇವರನ್ನು ನೋಡುವುದಕ್ಕೆ ಭಯಪಟ್ಟು ಮೋಶೆ ತನ್ನ
ಮುಖವನ್ನು ಮುಚ್ಚಿಕೊಂಡನು.
7ಆಗ ಯೆಹೋವನು, ''ನನ್ನ ಜನರು ಈಜಿಪ್ಟಿನಲ್ಲಿ
ಅನುಭವಿಸುತ್ತಿರುವ ಕಷ್ಟಗಳನ್ನು ನೋಡಿದ್ದೇನೆ. ಅಧಿ
ಕಾರಿಗಳು ಅವರನ್ನು ಹಿಂಸಿಸುವಾಗ ಅವರು ಇಟ್ಟ ಮೊರೆ
ಯನ್ನು ಕೇಳಿದ್ದೇನೆ. ಅವರ ದುಃಖವನ್ನೆಲ್ಲಾ ಬಲ್ಲೆನು.
8ಈಗ ನಾನು ಇಳಿದುಹೋಗಿ ಈಜಿಪ್ಟಿನವರಿಂದ ನನ್ನ
ಜನರನ್ನು ರಕ್ಷಿಸುವೆನು. ನಾನು ಅವರನ್ನು ಆ ದೇಶದಿಂದ
ಬಿಡುಗಡೆ ಮಾಡಿ ಒಳ್ಳೆಯದಾದ ಮತ್ತು ವಿಶಾಲವಾದ
ದೇಶಕ್ಕೆ ಅವರನ್ನು ನಡೆಸುವೆನು. ಅದು ಸಮೃದ್ಧಿಕರವಾದ
ದೇಶ.* ಕಾನಾನ್ಯರು, ಹಿತ್ತಿಯರು, ಅಮೋರಿಯರು,
ಪೆರಿಜೀಯರು, ಹಿವ್ವಿಯರು, ಮತ್ತು ಯೆಬೂಸಿಯರು
ವಾಸವಾಗಿರುವ ದೇಶ ಅದಾಗಿದೆ. 9ನಾನು ಇಸ್ರೇಲರ
ಮೊರೆಯನ್ನು ಕೇಳಿದ್ದೇನೆ. ಈಜಿಪ್ಟಿನವರು ಅವರಿಗೆ
ಕೊಡುವ ಹಿಂಸೆಯನ್ನು ನೋಡಿದ್ದೇನೆ. 10ಆದ್ದರಿಂದ
ನಾನು ನಿನ್ನನ್ನು ಫರೋಹನ ಬಳಿಗೆ ಕಳುಹಿಸುತ್ತಿದ್ದೇನೆ.
ಹೋಗು! ನನ್ನ ಜನರಾದ ಇಸ್ರೇಲರನ್ನು ಈಜಿಪ್ಟಿನಿಂದ
ಬಿಡುಗಡೆ ಮಾಡು!'' ಎಂದು ಹೇಳಿದನು.
11ಅದಕ್ಕೆ ಮೋಶೆಯು ಯೆಹೋವನಿಗೆ, ''ನಾನು
ಮಹಾ ವ್ಯಕ್ತಿಯೇನಲ್ಲ! ಫರೋಹನ ಸನ್ನಿಧಾನಕ್ಕೆ
ಹೋಗುವುದಕ್ಕೂ ಇಸ್ರೇಲರನ್ನು ಈಜಿಪ್ಟಿನಿಂದ ಬಿಡಿಸಿ
ಕೊಂಡು ಬರುವುದಕ್ಕೂ ನಾನೆಷ್ಟರವನು?'' ಎಂದು
ಹೇಳಿದನು.
12ಅದಕ್ಕೆ ದೇವರು ''ನೀನು ಇದನ್ನು ಮಾಡಬಹುದು;
ಯಾಕಂದರೆ ನಾನೇ ನಿನ್ನೊಂದಿಗೆ ಇರುವೆನು. ನಿನ್ನನ್ನು
ಕಳುಹಿಸಿದವನು ನಾನೇ ಎಂಬುದಕ್ಕೆ ಇದೇ ಸಾಕ್ಷಿ
ಯಾಗಿರುವುದು. ನೀನು ಇಸ್ರೇಲರನ್ನು ಈಜಿಪ್ಟಿನಿಂದ

---

**ಗೇರ್ಷೋಮ್** ಅಂದರೆ ''ಅನ್ಯದೇಶದಲ್ಲಿ ಪ್ರವಾಸಿಗ'' ಎಂದರ್ಥ.

**ಇತ್ರೋವ:** ಇವನನ್ನು ರೆಗೂವೇಲ ಎಂತಲೂ ಕರೆಯುತ್ತಿದ್ದರು.

**ಅದು … ದೇಶ** ಅಕ್ಷರಶಃ, ''ಹಾಲೂ ಜೇನೂ ಹರಿಯುವ ದೇಶ.''

ಬಿಡಿಸಿಕೊಂಡು ಬಂದಮೇಲೆ ಈ ಬೆಟ್ಟಕ್ಕೆ ಬಂದು ನೀನು
ನನ್ನನ್ನು ಆರಾಧಿಸುವೆ'' ಎಂದು ಹೇಳಿದನು.
13ಆಗ ಮೋಶೆಯು ದೇವರಿಗೆ, ''ನಾನು ಇಸ್ರೇಲರ
ಬಳಿಗೆ ಹೋಗಿ 'ನಿಮ್ಮ ಪೂರ್ವಿಕರ ದೇವರು ನನ್ನನ್ನು
ನಿಮ್ಮ ಬಳಿಗೆ ಕಳುಹಿಸಿದ್ದಾನೆ' ಎಂದು ಹೇಳಿದರೆ, ಅವರು
'ಆತನ ಹೆಸರೇನು?' ಎಂದು ಕೇಳುವರು. ಆಗ ನಾನು
ಅವರಿಗೆ ಏನು ಹೇಳಬೇಕು?'' ಎಂದು ಕೇಳಿದನು.
14ಆಗ ದೇವರು ಮೋಶೆಗೆ, ''ನಾನು 'ಇರುವಾತನೇ'
ಆಗಿದ್ದೇನೆ. ನೀನು ಇಸ್ರೇಲರ ಬಳಿಗೆ ಹೋದಾಗ 'ಇರು
ವಾತನೇ' ಎಂಬವನು ನನ್ನನ್ನು ನಿಮ್ಮ ಬಳಿಗೆ ಕಳುಹಿಸಿ
ದ್ದಾನೆ ಎಂದು ಹೇಳು'' ಅಂದನು.
15ಇದಲ್ಲದೆ ದೇವರು ಮೋಶೆಗೆ, ''ನೀನು ಇಸ್ರೇಲರಿಗೆ,
'ನಿಮ್ಮ ಪೂರ್ವಿಕರ ದೇವರೂ ಅಬ್ರಹಾಮನ ದೇವರೂ
ಇಸಾಕನ ದೇವರೂ ಯಾಕೋಬನ ದೇವರೂ ಆಗಿರುವ
ಯೆಹೋವನು ನಿಮ್ಮಲ್ಲಿಗೆ ನನ್ನನ್ನು ಕಳುಹಿಸಿದ್ದಾನೆ. ಇದೇ
ನನ್ನ ಶಾಶ್ವತವಾದ ಹೆಸರು; ತಲತಲಾಂತರಕ್ಕೂ ನನ್ನನ್ನು
ಸ್ಮರಿಸಬೇಕಾದ ಹೆಸರು ಇದೇ ಎಂದು ಹೇಳಬೇಕು''
ಅಂದನು.
16ಇದಲ್ಲದೆ ಯೆಹೋವನು ಅವನಿಗೆ, ''ನೀನು ಹೋಗಿ
ಇಸ್ರೇಲರ ನಾಯಕರನ್ನು ಒಟ್ಟುಗೂಡಿಸಿ ಅವರಿಗೆ, 'ನಿಮ್ಮ
ಪೂರ್ವಿಕರ ದೇವರಾದ ಯೆಹೋವನು ನನಗೆ ಕಾಣಿಸಿ
ಕೊಂಡನು. ಅಬ್ರಹಾಮನ, ಇಸಾಕನ, ಯಾಕೋಬನ
ದೇವರು ಹೇಳುವುದೇನಂದರೆ, ಈಜಿಪ್ಟಿನಲ್ಲಿ ನಿಮಗೆ
ಸಂಭವಿಸಿದವುಗಳನ್ನು ನಾನು ಲಕ್ಷ್ಯವಿಟ್ಟು ನೋಡಿದ್ದೇನೆ.
17ಈಜಿಪ್ಟಿನಲ್ಲಿ ನೀವು ಅನುಭವಿಸುತ್ತಿರುವ ಸಂಕಟಗ
ಳಿಂದ ಬಿಡಿಸಬೇಕೆಂದು ತೀರ್ಮಾನಿಸಿದ್ದೇನೆ. ಕಾನಾ
ನ್ಯರು, ಹಿತ್ತಿಯರು, ಅಮೋರಿಯರು, ಪೆರಿಜೀಯರು,
ಹಿವ್ವಿಯರು ಮತ್ತು ಯೆಬೂಸಿಯರು ವಾಸವಾಗಿರುವ
ಸಮೃದ್ಧಿಕರವಾದ ದೇಶಕ್ಕೆ ನಾನು ನಿಮ್ಮನ್ನು ನಡಿಸುವೆನು!'
ಎಂದು ಹೇಳು.
18''ಹಿರಿಯರು ನಿನಗೆ ಕಿವಿಗೊಡುವರು. ಆಗ ನೀನು
ಮತ್ತು ಹಿರಿಯರು ಈಜಿಪ್ಟಿನ ರಾಜನ ಬಳಿಗೆ ಹೋಗಿ,
'ಇಬ್ರಿಯರ ದೇವರಾದ ಯೆಹೋವನು ನಮಗೆ ಕಾಣಿಸಿ
ಕೊಂಡನು. ಆದ್ದರಿಂದ ನಾವು ಮರುಭೂಮಿಯಲ್ಲಿ
ಮೂರು ದಿನ ಪ್ರಯಾಣಮಾಡಿ ನಮ್ಮ ದೇವರಾದ
ಯೆಹೋವನಿಗೆ ಯಜ್ಞಗಳನ್ನು ಸಮರ್ಪಿಸಬೇಕು' ಎಂದು
ಹೇಳಿರಿ.
19''ಆದರೆ ಈಜಿಪ್ಟಿನ ರಾಜನು ನಿಮ್ಮನ್ನು ಹೋಗ
ಗೊಡಿಸುವುದಿಲ್ಲ ಎಂಬುದು ನನಗೆ ಗೊತ್ತಿದೆ. 20ಆದ್ದ
ರಿಂದ ನಾನು ಕೈಚಾಚಿ ಈಜಿಪ್ಟಿನ ವಿರುದ್ಧ ಮಹತ್ಕಾರ್ಯ
ಗಳನ್ನು ಮಾಡಿ ಅನೇಕ ವಿಧದಲ್ಲಿ ಬಾಧಿಸುವೆನು. ಆಗ
ಅವನು ನಿಮ್ಮನ್ನು ಹೋಗಗೊಡಿಸುವನು. 21ಈಜಿಪ್ಟಿನ
ಜನರು ಇಸ್ರೇಲರಿಗೆ ದಯೆತೋರುವಂತೆ ಮಾಡುವೆನು.
ಇಸ್ರೇಲರು ಈಜಿಪ್ಟನ್ನು ಬಿಟ್ಟು ಹೊರಡುವಾಗ ಈಜಿಪ್ಟಿ
ನವರು ಅವರಿಗೆ ಉಡುಗೊರೆಗಳನ್ನು ಕೊಡುವರು.
22''ಪ್ರತಿಯೊಬ್ಬ ಇಬ್ರಿಯ ಸ್ತ್ರೀಯು ಈಜಿಪ್ಟಿನ ನೆರೆಯ
ವರನ್ನಾಗಲೀ ಅಥವಾ ತನ್ನ ಮನೆಯಲ್ಲಿ ವಾಸಿಸುತ್ತಿರುವ
ಯಾವುದೇ ಸ್ತ್ರೀಯನ್ನಾಗಲೀ ಕೇಳಿದರೆ ಅವರು ಆಕೆಗೆ
ಉಡುಗೊರೆಗಳನ್ನು ಕೊಡುವರು. ನಿನ್ನ ಜನರು ಬೆಳ್ಳಿ
ಬಂಗಾರಗಳನ್ನು ಶ್ರೇಷ್ಠವಾದ ಬಟ್ಟೆಗಳನ್ನು ಪಡೆಯು
ವರು. ನೀವು ಈಜಿಪ್ಟನ್ನು ಬಿಡುವಾಗ ಆ ಉಡುಗೊರೆ
ಗಳನ್ನು ನಿಮ್ಮ ಮಕ್ಕಳಿಗೆ ತೊಡಿಸುವಿರಿ. ಈ ರೀತಿಯಲ್ಲಿ
ನೀವು ಈಜಿಪ್ಟಿನವರ ಐಶ್ವರ್ಯವನ್ನು ತೆಗೆದುಕೊಂಡು
ಹೋಗುವಿರಿ'' ಅಂದನು.

### ಮೋಶೆಗೆ ಸಾಕ್ಷಿ

4 ಆಗ ಮೋಶೆಯು ಯೆಹೋವನಿಗೆ, ''ಆದರೆ ನೀನು
ನನ್ನನ್ನು ಕಳುಹಿಸಿರುವೆ ಎಂದು ಇಸ್ರೇಲರು
ನಂಬುವುದೂ ಇಲ್ಲ; ಕೇಳುವುದೂ ಇಲ್ಲ. ಅವರು,
'ಯೆಹೋವನು ನಿನಗೆ ಪ್ರತ್ಯಕ್ಷನಾಗಲಿಲ್ಲ' ಎಂದು
ಹೇಳುವರು'' ಎಂದು ಹೇಳಿದನು.
2ಯೆಹೋವನು ಮೋಶೆಗೆ, ''ನಿನ್ನ ಕೈಯಲ್ಲಿರುವು
ದೇನು?'' ಅಂದನು.
ಮೋಶೆ, ''ಊರುಗೋಲು'' ಎಂದು ಉತ್ತರಿಸಿದನು.
3ಆಗ ಯೊಹೋವನು, ''ನಿನ್ನ ಊರುಗೋಲನ್ನು
ನೆಲದ ಮೇಲೆ ಬಿಸಾಡು'' ಅಂದನು.
ಮೋಶೆ, ತನ್ನ ಊರುಗೋಲನ್ನು ನೆಲದ ಮೇಲೆ
ಬಿಸಾಡಿದನು. ಆಗ ಕೋಲು ಹಾವಾಯಿತು. ಮೋಶೆ
ಅದರ ಬಳಿಯಿಂದ ಓಡಿಹೋದನು. 4ಬಳಿಕ
ಯೆಹೋವನು ಮೋಶೆಗೆ, ''ನಿನ್ನ ಕೈ ಚಾಚಿ ಅದರ ಬಾಲ
ವನ್ನು ಹಿಡಿದುಕೊ'' ಎಂದು ಹೇಳಿದನು.''
ಮೋಶೆಯು ಕೈಚಾಚಿ ಹಾವಿನ ಬಾಲವನ್ನು ಹಿಡಿದನು.
ಆಗ ಹಾವು ಕೋಲಾಯಿತು. 5ಆಗ ದೇವರು, ''ನಿನ್ನ
ಕೋಲನ್ನು ಈ ರೀತಿಯಲ್ಲಿ ಉಪಯೋಗಿಸು. ನಿನ್ನ
ಪೂರ್ವಿಕರ, ಆಬ್ರಹಾಮನ, ಇಸಾಕನ ಮತ್ತು ಯಾಕೋ
ಬನ ದೇವರು ನಿನಗೆ ಪ್ರತ್ಯಕ್ಷನಾದನೆಂದು ಆಗ ಅವರು
ನಂಬುವರು'' ಎಂದು ಹೇಳಿದನು.
6ಬಳಿಕ ಯೆಹೋವನು ಮೋಶೆಗೆ, ''ನಾನು ನಿನಗೆ
ಇನ್ನೊಂದು ಸಾಕ್ಷಿಯನ್ನು ಕೊಡುತ್ತೇನೆ. ನಿನ್ನ ಕೈಯನ್ನು
ಉಡಿಯಲ್ಲಿ ಹಾಕು'' ಅಂದನು.
ಮೋಶೆ ತನ್ನ ಕೈಯನ್ನು ಉಡಿಯಲ್ಲಿ ಹಾಕಿ ಹೊರ
ತೆಗೆದಾಗ ಅದಕ್ಕೆ ತೊನ್ನು ಹಿಡಿದಿತ್ತು.
7ಆಗ ದೇವರು, ''ನಿನ್ನ ಕೈಯನ್ನು ಉಡಿಯಲ್ಲಿ ಹಾಕು''
ಅಂದನು. ಅಂತೆಯೇ ಮೋಶೆಯು ತನ್ನ ಕೈಯನ್ನು ಮತ್ತೆ

ಉಡಿಯಲ್ಲಿ ಹಾಕಿ ಹೊರತೆಗೆದಾಗ ಅದು ಮೊದಲಿನಂತೆ ಆಗಿತ್ತು.

8ಆಗ ಯೆಹೋವನು ಅವನಿಗೆ, ‘‘ನೀನು ನಿನ್ನ ಊರುಗೋಲಿನಿಂದ ಸೂಚಕಕಾರ್ಯ ಮಾಡುವಾಗ ಜನರು ನಿನ್ನನ್ನು ನಂಬುವರು; ನಿನ್ನ ಮಾತಿಗೆ ಲಕ್ಷ್ಯಕೊಡುವರು. 9ನೀನು ಈ ಎರಡು ಸೂಚಕ ಕಾರ್ಯಗಳನ್ನು ತೋರಿಸಿದ ನಂತರವೂ ಅವರು ನಂಬದಿದ್ದರೆ, ನೈಲ್ ನದಿಯಿಂದ ಸ್ವಲ್ಪ ನೀರನ್ನು ತೆಗೆದುಕೊಂಡು ಅದನ್ನು ನೆಲದ ಮೇಲೆ ಸುರಿ; ನೀರು ನೆಲವನ್ನು ಮುಟ್ಟಿದ ಕೂಡಲೇ ರಕ್ತವಾಗುವುದು’’ ಎಂದು ಹೇಳಿದನು.

10ಮೋಶೆಯು ಯೆಹೋವನಿಗೆ, ‘‘ಯೆಹೋವನೇ ನಾನು ನಿನಗೆ ಸತ್ಯವಾಗಿ ಹೇಳುವುದೇನೆಂದರೆ ನನಗೆ ವಾಕ್ಚಾತುರ್ಯವಿಲ್ಲ. ನನ್ನ ಮಾತೂ ನಾಲಿಗೆಯೂ ಮಂದವಾಗಿದೆ’’ ಎಂದು ಹೇಳಿದನು.

11ಆಗ ಯೆಹೋವನು ಅವನಿಗೆ, ‘‘ಮನುಷ್ಯನ ಬಾಯನ್ನು ಯಾರು ಮಾಡಿದರು? ಮನುಷ್ಯನನ್ನು ಕಿವುಡನನ್ನಾಗಿ ಅಥವಾ ಮೂಕನನ್ನಾಗಿ ಮಾಡಬಲ್ಲವರು ಯಾರು? ಮನುಷ್ಯನನ್ನು ಕುರುಡನನ್ನಾಗಿ ಮಾಡಬಲ್ಲವರು ಯಾರು? ಮನುಷ್ಯನಿಗೆ ದೃಷ್ಟಿಕೊಟ್ಟವನು ಯಾರು? ಯೆಹೋವನಾದ ನಾನಲ್ಲವೇ? 12ಈಗ ಹೋಗು. ನೀನು ಮಾತಾಡುವಾಗ ನಾನೇ ನಿನ್ನೊಂದಿಗಿರುವೆನು. ನೀನು ಹೇಳಬೇಕಾದ ಮಾತುಗಳನ್ನು ನಾನು ನಿನಗೆ ಕೊಡುವೆನು’’ ಎಂದು ಹೇಳಿದನು.

13ಆದರೆ ಮೋಶೆ, ‘‘ನನ್ನ ಯೆಹೋವನೇ ದಯಮಾಡಿ ನನ್ನ ಬದಲಾಗಿ ಬೇರೊಬ್ಬನನ್ನು ಕಳುಹಿಸು’’ ಎಂದು ಬೇಡಿಕೊಂಡನು.

14ಯೆಹೋವನು ಮೋಶೆಯ ಮೇಲೆ ಕೋಪಗೊಂಡು, ‘‘ಹಾಗಾದರೆ ನಿನ್ನ ಅಣ್ಣವಾದ ಲೇವಿ ಕುಟುಂಬದ ಆರೋನನನ್ನೂ ನಾನು ಉಪಯೋಗಿಸುವೆನು. ಅವನಿಗೆ ವಾಕ್ಚಾತುರ್ಯವಿದೆ. ಈಗ ಅವನು ನಿನ್ನ ಬಳಿಗೆ ಬರುತ್ತಿದ್ದಾನೆ. ನಿನ್ನನ್ನು ಕಂಡು ಅವನಿಗೆ ಸಂತೋಷವಾಗುವುದು. 15ಅವನು ನಿನ್ನೊಡನೆ ಫರೋಹನ ಬಳಿಗೆ ಬರುವನು. ನೀನು ಹೇಳಬೇಕಾದದ್ದನ್ನು ನಾನೇ ನಿನಗೆ ತಿಳಿಸುವೆನು. ಅದನ್ನು ನೀನು ಆರೋನನಿಗೆ ತಿಳಿಸು. ಆರೋನನು ಫರೋಹನೊಡನೆ ಸರಿಯಾಗಿ ಮಾತಾಡುವನು. 16ಆರೋನನು ಜನರೊಂದಿಗೂ ನಿನ್ನ ಪರವಾಗಿಯೂ ಮಾತಾಡುವನು. ನೀನು ಮಹಾರಾಜನಂತೆ ಇರುವೆ; ಅವನು ನಿನಗೆ ಅಧಿಕೃತ ಮಾತುಗಾರನಂತೆ ಇರುವನು.* 17ಆದ್ದರಿಂದ ಹೋಗು. ನಿನ್ನ ಊರುಗೋಲನ್ನೂ ತೆಗೆದುಕೊಂಡು ಹೋಗು. ಯಾಕಂದರೆ ಅದರಿಂದಲೇ ನೀನು ಅದ್ಭುತಕಾರ್ಯಗಳನ್ನು ಮಾಡುವೆ’’ ಎಂದು ಹೇಳಿದನು.

### ಮೋಶೆ ಈಜಿಪ್ಟಿಗೆ ಹಿಂತಿರುಗಿದ್ದು

18ಬಳಿಕ ಮೋಶೆ ತನ್ನ ಮಾವನಾದ ಇತ್ರೋನನ ಬಳಿಗೆ ಹಿಂತಿರುಗಿದನು. ಮೋಶೆ ಇತ್ರೋನನಿಗೆ, ‘‘ಈಜಿಪ್ಟಿನಲ್ಲಿರುವ ನನ್ನ ಜನರ ಬಳಿಗೆ ಹೋಗಿ ಅವರು ಇನ್ನೂ ಜೀವಂತವಾಗಿದ್ದಾರೋ ಏನೋ ನೋಡುವೆನು’’ ಎಂದು ಹೇಳಿದನು.

ಇತ್ರೋನನು ಮೋಶೆಗೆ, ‘‘ನೀನು ಸಮಾಧಾನದಿಂದ ಹೋಗಿ ಬಾ’’ ಎಂದು ಹೇಳಿದನು.

19ಮೋಶೆ ಇನ್ನೂ ಮಿದ್ಯಾನಿನಲ್ಲಿದ್ದಾಗ ಯೆಹೋವನು, ‘‘ಈಗ ನೀನು ಸುರಕ್ಷಿತವಾಗಿ ಈಜಿಪ್ಟಿಗೆ ಹೋಗಬಹುದು. ನಿನ್ನನ್ನು ಕೊಲ್ಲಬೇಕೆಂದಿದ್ದವರು ಸತ್ತು ಹೋಗಿದ್ದಾರೆ’’ ಅಂದನು.

20ಆದ್ದರಿಂದ ಮೋಶೆ ತನ್ನ ಹೆಂಡತಿಯನ್ನೂ ಗಂಡುಮಕ್ಕಳನ್ನೂ ಕತ್ತೆಗಳ ಮೇಲೆ ಕುಳ್ಳಿರಿಸಿ ಈಜಿಪ್ಟ್ ದೇಶಕ್ಕೆ ಮರಳಿ ಪ್ರಯಾಣ ಮಾಡಿದನು. ಮೋಶೆಯು ಯೆಹೋವನ ಶಕ್ತಿಯಿಂದ ಕೂಡಿದ ತನ್ನ ಊರುಗೋಲನ್ನು ಹಿಡಿದುಕೊಂಡು ಹೋದನು.*

21ಮೋಶೆ ಈಜಿಪ್ಟಿಗೆ ಪ್ರಯಾಣ ಮಾಡುತ್ತಿದ್ದಾಗ ಯೆಹೋವನು ಅವನೊಡನೆ ಮಾತಾಡಿ, ‘‘ನೀನು ಫರೋಹನೊಂದಿಗೆ ಮಾತಾಡುವಾಗ ನಾನು ತೋರಿಸಿಕೊಟ್ಟ ಅದ್ಭುತಕಾರ್ಯಗಳನ್ನೆಲ್ಲಾ ಅವನ ಮುಂದೆ ಮಾಡು. ಆದರೂ ನಾನು ಫರೋಹನ ಹೃದಯವನ್ನು ಕಠಿಣಗೊಳಿಸುವುದರಿಂದ ಅವನು ಇಸ್ರೇಲರನ್ನು ಹೋಗಗೊಡಿಸುವುದಿಲ್ಲ. 22ಆಗ ನೀನು ಫರೋಹನಿಗೆ, ‘ಇಸ್ರೇಲ್ ಜನಾಂಗವು ದೇವರಿಗೆ (ಯೆಹೋವನಿಗೆ) ಚೊಚ್ಚಲು ಮಗನಂತಿದೆ. 23ನನ್ನ ಮಗನು ನಿನ್ನ ದೇಶದಿಂದ ಹೋಗಿ ನನ್ನನ್ನು ಆರಾಧಿಸಲು ನೀನು ಅಪ್ಪಣೆ ಕೊಡಬೇಕು. ಇಲ್ಲವಾದರೆ ನಾನು ನಿನ್ನ ಚೊಚ್ಚಲು ಮಗನನ್ನು ಕೊಲ್ಲುವೆನು’ ಎಂದು ಯೆಹೋವನು ಹೇಳುತ್ತಾನೆ’’ ಎಂಬುದಾಗಿ ತಿಳಿಸಬೇಕು.

### ಮೋಶೆಯ ಮಗನಿಗೆ ಸುನ್ನತಿಯಾದದ್ದು

24ಮೋಶೆಯು ಈಜಿಪ್ಟರಿಗೆ ತನ್ನ ಪ್ರಯಾಣವನ್ನು ಮುಂದುವರೆಸಿ ಛತ್ರವೊಂದರಲ್ಲಿ ಇಳಿದುಕೊಂಡನು. ಆಗ ಯೆಹೋವನು ಮೋಶೆಯನ್ನು ಸಂಧಿಸಿ ಅವನನ್ನು ಕೊಲ್ಲಬೇಕೆಂದಿದ್ದನು.* 25ಆದರೆ ಚಿಪ್ಪೋರಳು ಕಲ್ಲಿನ

---

**ನೀನು … ಮಾತುಗಾರನಂತೆ ಇರುವನು** ಅಕ್ಷರಶಃ ‘‘ಅವನು ನಿನ್ನ ಬಾಯಾಗಿರುವನು, ಮತ್ತು ನೀನು ಅವನಿಗೆ ದೇವರಂತಿರುವೆ.’’

**ಮೋಶೆ … ಹೋದನು** ಅಕ್ಷರಶಃ ‘‘ಮೋಶೆಯು ದೇವರ ಊರುಗೋಲನ್ನು ತೆಗೆದುಕೊಂಡು ಹೋದನು.’’

**ಕೊಲ್ಲಲು** ಬಹುಶಃ ‘‘ಸುನ್ನತಿ ಮಾಡಲು.’’

ಚೂರಿಯನ್ನು ತೆಗೆದುಕೊಂಡು ತನ್ನ ಮಗನಿಗೆ ಸುನ್ನತಿ
ಮಾಡಿ ಚರ್ಮವನ್ನು ತೆಗೆದುಕೊಂಡು ಮೋಶೆಯ ಪಾದ
ಗಳಿಗೆ ಮುಟ್ಟಿಸಿ, ‘‘ನೀನು ರಕ್ತಧಾರೆಯಿಂದಾದ ಮದುವ
ಣಿಗನಾದೆ’’ ಅಂದಳು. [26]ಆಕೆ ಸುನ್ನತಿಯ ನಿಮಿತ್ತವೇ
‘‘ರಕ್ತಧಾರೆಯಿಂದಾದ ಮದುವಣಿಗನಾದೆ’’ ಎಂದು
ಹೇಳಿದರಿಂದ ಯೆಹೋವನು ಅವನನ್ನು ಉಳಿಸಿದನು.

## ಯೆಹೋವನ ಮುಂದೆ ಮೋಶೆ ಆರೋನರು

[27]ಯೆಹೋವನು ಆರೋನನೊಡನೆ ಮಾತಾಡಿ
ಅವನಿಗೆ, ‘‘ಅರಣ್ಯಕ್ಕೆ ಹೋಗಿ ಮೋಶೆಯನ್ನು ಭೇಟಿ
ಯಾಗು’’ ಎಂದು ಹೇಳಿದ್ದನು. ಆದ್ದರಿಂದ ಆರೋನನು
ಹೋಗಿ ದೇವರ ಬೆಟ್ಟದಲ್ಲಿ ಮೋಶೆಯನ್ನು ಬೇಟಿ
ಯಾದನು. ಆರೋನನು ಮೋಶೆಯನ್ನು ಕಂಡು ಅವನಿಗೆ
ಮುದ್ದಿಟ್ಟನು. [28]ಯೆಹೋವನು ಹೇಳಿದದ್ದನ್ನೆಲ್ಲಾ
ಮೋಶೆಯು ಆರೋನನಿಗೆ ತಿಳಿಸಿದನು. ಯೆಹೋವನು
ತನ್ನನ್ನು ಯಾಕೆ ಕಳುಹಿಸಿದನೆಂದೂ ತಾನು ಯಾವ ಅದ್ಭುತ
ಕಾರ್ಯಗಳನ್ನು ಮಾಡಬೇಕೆಂದು ಆರೋನನಿಗೆ
ವಿವರಿಸಿದನು.
[29]ಆದ್ದರಿಂದ ಮೋಶೆ ಆರೋನರು ಹೋಗಿ ಇಸ್ರೇಲ್
ಜನರ ಹಿರಿಯರೆಲ್ಲರನ್ನು ಒಟ್ಟುಗೂಡಿಸಿದರು. [30]ಆಗ
ಆರೋನನು ಜನರೊಂದಿಗೆ ಮಾತಾಡಿದನು.
ಯೆಹೋವನು ಮೋಶೆಗೆ ಹೇಳಿದ್ದನ್ನೆಲ್ಲಾ ಅವನು ಅವರಿಗೆ
ತಿಳಿಸಿದನು. ಬಳಿಕ ಮೋಶೆ ಜನರೆಲ್ಲರೂ ನೋಡುವಂತೆ
ಸಾಕ್ಷ್ಯಾಧಾರಗಳನ್ನು ಮಾಡಿದನು. [31]ಯೆಹೋವನು
ಮೋಶೆಯನ್ನು ಕಳುಹಿಸಿದ್ದಾನೆಂದು ಜನರು ನಂಬಿದರು.
ಯೆಹೋವನು ಇಸ್ರೇಲರಿಗೆ ಸಹಾಯ ಮಾಡಬೇಕೆಂದಿ
ರುವುದನ್ನು ಅವರು ತಿಳಿದು ತಲೆಬಾಗಿ ಆತನನ್ನು ಆರಾಧಿ
ಸಿದರು. ಯೆಹೋವನು ತಮ್ಮ ಸಂಕಟಗಳನ್ನು ನೋಡಿದ್ದ
ರಿಂದ ಅವರು ಆತನನ್ನು ಆರಾಧಿಸಿದರು.

## ಫರೋಹನ ಮುಂದೆ ಮೋಶೆ ಆರೋನರು

5 ಮೋಶೆ ಆರೋನರು ಜನರೂಡನೆ ಮಾತಾಡಿದ
ನಂತರ ಫರೋಹನ ಬಳಿಗೆ ಹೋಗಿ, ‘‘ಇಸ್ರೇಲರ
ದೇವರಾದ ಯೆಹೋವನು ನಿನಗೆ, ‘ನನ್ನ ಜನರು ಅರಣ್ಯ
ದೊಳಗೆ ಹೋಗಿ ಜಾತ್ರೆ ನಡೆಸಲು ಅಪ್ಪಣೆ ಕೊಡಬೇಕು’
ಎನ್ನುತ್ತಾನೆ’’ ಎಂದು ಹೇಳಿದರು.
[2]ಆದರೆ ಫರೋಹನು, ‘‘ಯೆಹೋವನು ಯಾರು?
ನಾನು ಆತನಿಗೆ ಯಾಕೆ ವಿಧೇಯನಾಗಬೇಕು. ಇಸ್ರೇಲ
ರನ್ನು ನಾನು ಯಾಕೆ ಹೋಗಗೊಡಿಸಬೇಕು. ನೀವು
ಯೆಹೋವನೆಂದು ಕರೆಯುವ ಆತನನ್ನು ನಾನು ಅರಿ
ಯೆನು, ಆದ್ದರಿಂದ ಇಸ್ರೇಲರನ್ನು ಹೋಗಗೊಡಿಸುವು
ದಿಲ್ಲ’’ ಅಂದನು.
[3]ಆದಕ್ಕೆ ಮೋಶೆ ಆರೋನರು, ‘‘ಇಬ್ರಿಯರ ದೇವರು
ನಮ್ಮ ಸಂಗಡ ಮಾತಾಡಿದ್ದಾನೆ. ಆದ್ದರಿಂದ ನಾವು ಅರಣ್ಯ
ದಲ್ಲಿ ಮೂರು ದಿನಗಳವರೆಗೆ ಪ್ರಯಾಣಮಾಡಿ ನಮ್ಮ
ದೇವರಾದ ಯೆಹೋವನಿಗೆ ಯಜ್ಞವನ್ನು* ಸಮರ್ಪಿಸು
ವೆವು. ಇಲ್ಲವಾದರೆ ಆತನು ನಮ್ಮನ್ನು ಕಾಯಿಲೆ
ಯಿಂದಲೋ ಕತ್ತಿಯಿಂದಲೋ ಸಂಹರಿಸುವನು’’
ಎಂದು ಹೇಳಿದರು.
[4]ಆದರೆ ಈಜಿಪ್ಟಿನ ರಾಜನು ಅವರಿಗೆ, ‘‘ಮೋಶೆ
ಆರೋನರೇ, ನೀವು ಕೆಲಸಗಾರರಿಗೆ ತೊಂದರೆ ಮಾಡು
ತ್ತಿದ್ದೀರಿ, ಅವರು ತಮ್ಮ ಕೆಲಸ ಮಾಡಲಿ! ನೀವು ನಿಮ್ಮ
ಕೆಲಸವನ್ನು ಮಾಡಿ! [5]ಇಲ್ಲಿ ಬಹಳ ಮಂದಿ ಕೆಲಸಗಾರ
ರಿದ್ದಾರೆ; ಅವರು ಕೆಲಸ ಮಾಡದಂತೆ ನೀವು ತಡೆಯು
ವುದೇಕೆ’’ ಎಂದು ಹೇಳಿದನು.

## ಫರೋಹನು ಜನರನ್ನು ದಂಡಿಸಿದ್ದು

[6]ಅದೇ ದಿನ ಫರೋಹನು ಬಿಟ್ಟಿ ಕೆಲಸ ಮಾಡಿಸುವ
ಅಧಿಕಾರಿಗಳಿಗೆ ಮತ್ತು ಮೇಸ್ತ್ರಿಗಳಿಗೆ, [7]‘‘ಇಟ್ಟಿಗೆಗಳನ್ನು
ಮಾಡುವುದಕ್ಕೆ ಬೇಕಾದ ಹುಲ್ಲನ್ನು ನೀವು ಜನರಿಗೆ
ಇಲ್ಲಿಯವರೆಗೆ ಕೊಟ್ಟದ್ದೀರಿ. ಆದರೆ ಈಗ ಇಟ್ಟಿಗೆಗಳನ್ನು
ಮಾಡಲು ಅವರೇ ಹುಲ್ಲನ್ನು ಕಂಡುಕೊಳ್ಳಬೇಕೆಂದು
ಅವರಿಗೆ ಹೇಳಿರಿ. [8]ಆದರೂ ಅವರು ಹಿಂದೆ ಮಾಡು
ತ್ತಿದ್ದಷ್ಟೇ ಇಟ್ಟಿಗೆಗಳನ್ನು ಈಗಲೂ ಮಾಡಬೇಕು. ಅವರು
ಸೋಮಾರಿಗಳಾಗಿದ್ದಾರೆ. ಆದಕಾರಣ ತಮ್ಮನ್ನು ಹೋಗ
ಬಿಡಬೇಕೆಂದು ಕೇಳುತ್ತಿದ್ದಾರೆ. ಅವರಿಗೆ ಸಾಕಷ್ಟು ಕೆಲಸ
ವಿಲ್ಲ. ಆದ್ದರಿಂದ ತಮ್ಮ ದೇವರಿಗೆ ಯಜ್ಞಗಳನ್ನು ಅರ್ಪಿ
ಸಲು ಹೋಗಗೊಡಿಸಬೇಕೆಂದು ಕೇಳುತ್ತಾರೆ. [9]ಈ ಜನ
ರಿಗೆ ಇನ್ನೂ ಕಷ್ಟಕರವಾದ ಕೆಲಸವನ್ನು ಕೊಡಿರಿ. ಅವರು
ಕಾರ್ಯಮಗ್ನರಾಗಿರುವಂತೆ ನೋಡಿಕೊಳ್ಳಿರಿ. ಆಗ ಅವ
ರಿಗೆ ಮೋಶೆಯ ಸುಳ್ಳುಗಳನ್ನು ಕೇಳುವುದಕ್ಕೆ ಸಮಯ
ವಿರುವುದಿಲ್ಲ’’ ಎಂದು ಹೇಳಿದನು.
[10]ಆದ್ದರಿಂದ ಈಜಿಪ್ಟಿನ ಬಿಟ್ಟಿ ಕೆಲಸ ಮಾಡಿಸುವ ಅಧಿ
ಕಾರಿಗಳು ಮತ್ತು ಮೇಸ್ತ್ರಿಗಳು ಇಸ್ರೇಲರ ಬಳಿಗೆ ಬಂದು,
‘‘ಫರೋಹನು ಇಟ್ಟಿಗೆಗಳನ್ನು ಮಾಡಲು ನಿಮಗೆ ಹುಲ್ಲು
ಕೊಡುವುದಿಲ್ಲವೆಂದು ತೀರ್ಮಾನಿಸಿದ್ದಾನೆ. [11]ಆದ್ದರಿಂದ
ಹೋಗಿ ಹುಲ್ಲನ್ನು ಕಂಡುಕೊಳ್ಳಿರಿ. ಆದರೆ ನೀವು
ಮೊದಲು ಮಾಡುತ್ತಿದ್ದಷ್ಟೇ ಇಟ್ಟಿಗೆಗಳನ್ನು ಮಾಡ
ಬೇಕು’’ ಎಂದು ಹೇಳಿದರು.
[12]ಆದ್ದರಿಂದ ಜನರು ಹುಲ್ಲನ್ನು ಹುಡುಕುತ್ತಾ ಈಜಿಪ್ಟಿನ
ಪ್ರತಿಯೊಂದು ಕಡೆಗೂ ಹೋದರು. [13]ಬಿಟ್ಟಿ ಕೆಲಸ
ಮಾಡಿಸುವ ಅಧಿಕಾರಿಗಳು, ಜನರಿಂದ ಕಷ್ಟಕರವಾದ

---

**ಯಜ್ಞ** ದೇವರಿಗೆ ಕಾಣಿಕೆ, ಸಾಮಾನ್ಯವಾಗಿ ಒಂದು ವಿಶೇಷ ಪ್ರಾಣಿಯನ್ನು ಕೊಂದು ಯಜ್ಞವೇದಿಕೆಯ ಮೇಲೆ ಸುಡುತ್ತಿದ್ದರು.

ಕೆಲಸಗಳನ್ನು ಬಲವಂತದಿಂದ ಮಾಡಿಸುತ್ತಲೇ ಇದ್ದರು.
ಮೊದಲು ಅವರಿಗೆ ಹುಲ್ಲನ್ನು ಕೊಟ್ಟಿದ್ದಾಗ ಮಾಡು
ತ್ತಿದ್ದಷ್ಟೇ ಇಟ್ಟಿಗೆಗಳನ್ನು ಬಲವಂತದಿಂದ ಮಾಡಿಸಿದರು.
[14]ಈಜಿಪ್ಟಿನ ಈ ಅಧಿಕಾರಿಗಳು ಇಬ್ರಿಯ ಮೇಸ್ತ್ರಿಗಳನ್ನು
ಆರಿಸಿ ಜನರು ಮಾಡಿದ ಕೆಲಸಕ್ಕೆ ಅವರನ್ನು ಜವಾಬ್ದಾ
ರರನ್ನಾಗಿ ಮಾಡಿದರು. ಈಜಿಪ್ಟಿನ ಅಧಿಕಾರಿಗಳು
ಇಬ್ರಿಯ ಮೇಸ್ತ್ರಿಗಳನ್ನು ಹೊಡೆದು, ‘‘ನೀವು ಹಿಂದೆ
ಮಾಡುತ್ತಿದ್ದಷ್ಟೆ ಇಟ್ಟಿಗೆಗಳನ್ನು ಯಾಕೆ ಮಾಡುತ್ತಿಲ್ಲ?
ಹಿಂದೆ ನೀವು ಮಾಡಲು ಸಾಧ್ಯವಾಗಿದ್ದರೆ, ಈಗಲೂ ನೀವು
ಮಾಡಬಹುದು’’ ಎಂದು ಹೇಳಿದರು.

[15]ಆಗ ಇಬ್ರಿಯ ಮೇಸ್ತ್ರಿಗಳು ಫರೋಹನ ಬಳಿಗೆ
ಹೋಗಿ, ‘‘ನಿನ್ನ ಸೇವಕರಾದ ನಮಗೆ ನೀನು ಯಾಕೆ ಈ
ರೀತಿ ಮಾಡುತ್ತಿ? [16]ನೀನು ನಮಗೆ ಹುಲ್ಲು ಕೊಡುವು
ದಿಲ್ಲ. ಆದರೆ ನಾವು ಮೊದಲು ಮಾಡುತ್ತಿದ್ದಷ್ಟೇ ಇಟ್ಟಿಗೆ
ಗಳನ್ನು ಮಾಡಬೇಕೆಂದು ನಮಗೆ ಅಪ್ಪಣೆಯಾಗಿರುವುದ
ರಿಂದ ನಾವು ಅಧಿಕಾರಿಗಳಿಂದ ಹೊಡೆತ ತಿನ್ನಬೇಕಾ
ಯಿತು. ಹೀಗೆ ನಿನ್ನ ಜನರು ತಪ್ಪು ಮಾಡುತ್ತಿದ್ದಾರೆ’’
ಎಂದು ದೂರು ಹೇಳಿದರು.

[17]ಫರೋಹನು, ‘‘ನೀವು ಸೋಮಾರಿಗಳು. ನಿಮಗೆ
ಕೆಲಸ ಮಾಡಲು ಇಷ್ಟವಿಲ್ಲ. ಆದುದರಿಂದ ನಿಮ್ಮನ್ನು
ಹೊಗಗೊಡಿಸಬೇಕೆಂದು ನೀನು ನನ್ನನ್ನು ಕೇಳುತ್ತೀರಿ.
ಇಲ್ಲಿಂದ ಹೊರಟುಹೋಗಿ ಯೆಹೋವನಿಗೆ ಯಜ್ಞ
ಗಳನ್ನು ಮಾಡಬೇಕೆಂದು ಅಪೇಕ್ಷಿಸುತ್ತೀರಿ. [18]ಈಗ ನಿಮ್ಮ
ಕೆಲಸಕ್ಕೆ ಹೋಗಿರಿ! ನಾವು ನಿಮಗೆ ಹುಲ್ಲನ್ನು ಕೊಡು
ವುದಿಲ್ಲ. ಆದರೆ ನೀವು ಹಿಂದೆ ಮಾಡುತ್ತಿದ್ದಷ್ಟೇ ಇಟ್ಟಿಗೆ
ಗಳನ್ನು ಮಾಡಬೇಕು’’ ಎಂದು ಉತ್ತರಿಸಿದನು.

[19]ಇಬ್ರಿಯ ಮೇಸ್ತ್ರಿಗಳಿಗೆ ತಾವು ತೊಂದರೆಯಲ್ಲಿದ್ದೇ
ವೆಂದು ತಿಳಿಯಿತು. ತಾವು ಹಿಂದೆ ಮಾಡುತ್ತಿದ್ದಷ್ಟೇ ಇಟ್ಟಿಗೆ
ಗಳನ್ನು ತಮ್ಮಿಂದ ಮಾಡಲಾಗುವುದಿಲ್ಲವೆಂದು ಅವರಿಗೆ
ಗೊತ್ತಿತ್ತು. [20]ಅವರು ಫರೋಹನನ್ನು ಸಂಧಿಸಿ ಹೊರಟು
ಹೋಗುವಾಗ ತಮಗಾಗಿ ಕಾಯುತ್ತಿದ್ದ ಮೋಶೆ ಆರೋನ
ರನ್ನು ಕಂಡು, [21]‘‘ನಮಗೆ ಹೋಗಲು ಅಪ್ಪಣೆ ಕೊಡ
ಬೇಕೆಂದು ನೀವು ಫರೋಹನನ್ನು ಕೇಳಿ ನಮಗೆ ಕೆಟ್ಟ
ದ್ದನ್ನು ಮಾಡಿದಿರಿ. ಫರೋಹನು ಮತ್ತು ಅವನ ಅಧಿ
ಕಾರಿಗಳು ನಮ್ಮನ್ನು ದ್ವೇಷಿಸುವಂತೆ ನೀವು ಮಾಡಿದ್ದದ
ರಿಂದ ಯೆಹೋವನು ನಿಮಗೆ ತೀರ್ಪು ನೀಡಲಿ. ಅವರು
ನಮ್ಮನ್ನು ಕೊಲ್ಲುವುದಕ್ಕೆ ನೀವು ಅವಕಾಶ ಮಾಡಿ
ಕೊಟ್ಟಿರಿ’’ ಎಂದು ಹೇಳಿದರು.

## ಮೋಶೆಯು ದೇವರಿಗೆ ಸಲ್ಲಿಸಿದ ದೂರು

[22]ಆಗ ಮೋಶೆಯು ಯೆಹೋವನಿಗೆ ಪ್ರಾರ್ಥಿಸಿ,
‘‘ಯೆಹೋವನೇ, ನಿನ್ನ ಜನರಿಗೆ ಈ ಕೇಡನ್ನು ಏಕೆ
ಮಾಡಿದೆ? ನನ್ನನ್ನು ಯಾಕೆ ಇಲ್ಲಿಗೆ ಕಳುಹಿಸಿದೆ? [23]ನಾನು
ಫರೋಹನ ಬಳಿಗೆ ಹೋಗಿ ನೀನು ಹೇಳಿದ್ದನ್ನೇ ತಿಳಿಸಿದೆ.
ಆದರೆ ಅಂದಿನಿಂದ ಅವನು ಜನರನ್ನು ಕೀಳಾಗಿ ಕಾಣು
ತ್ತಿದ್ದಾನೆ. ಅಲ್ಲದೆ ನೀನೂ ನಿನ್ನ ಜನರಿಗೆ ಸಹಾಯ
ಮಾಡುತ್ತಿಲ್ಲ’’ ಅಂದನು.

6 ಆಗ ಯೆಹೋವನು ಮೋಶೆಗೆ, ‘‘ನಾನು ಫರೋಹ
ನಿಗೆ ಮಾಡುವುದನ್ನು ಈಗ ನೀನು ನೋಡುವೆ.
ನಾನು ನನ್ನ ಮಹಾಶಕ್ತಿಯನ್ನು ಅವನಿಗೆ ವಿರುದ್ಧವಾಗಿ
ಉಪಯೋಗಿಸುವುದರಿಂದ ಅವನು ನನ್ನ ಜನರನ್ನು
ಹೋಗಗೊಡಿಸುವನು; ಬಲವಂತದಿಂದ ಅವರನ್ನು
ಹೊರಡಿಸುವನು’’ ಎಂದು ಹೇಳಿದನು.

[2]ಬಳಿಕ ಯೆಹೋವನು ಮೋಶೆಗೆ, [3]‘‘ನಾನು
ಯೆಹೋವನೇ. ನಾನು ಅಬ್ರಹಾಮನಿಗೂ ಇಸಾಕನಿಗೂ
ಯಾಕೋಬನಿಗೂ ಕಾಣಿಸಿಕೊಂಡೆನು. ಅವರು ನನ್ನನ್ನು
‘ಎಲ್ ಶದ್ದಾಯ್ (ಸರ್ವಶಕ್ತನಾದ ದೇವರು) ಎಂದು
ಕರೆದರು. ಆದರೆ ನಾನು ನನ್ನನ್ನು ಯೆಹೋವ ಎಂಬ ನನ್ನ
ಹೆಸರಿನಲ್ಲಿ ಅವರಿಗೆ ಗೊತ್ತುಪಡಿಸಿಕೊಳ್ಳಲಿಲ್ಲ. [4]ನಾನು
ಅವರೊಂದಿಗೆ ಒಂದು ಒಡಂಬಡಿಕೆಯನ್ನು ಮಾಡಿ
ಕೊಂಡೆನು. ಕಾನಾನ್ ದೇಶವನ್ನು ಅವರಿಗೆ ಕೊಡುವು
ದಾಗಿ ನಾನು ವಾಗ್ದಾನ ಮಾಡಿದೆನು. ಅವರು ಆ ದೇಶದಲ್ಲಿ
ಜೀವಿಸಿದರೂ ಅದು ಅವರ ಸ್ವಂತ ದೇಶವಾಗಿರಲಿಲ್ಲ.
[5]ಈಗ ಇಸ್ರೇಲರ ಕಷ್ಟಗಳನ್ನೂ ಬಲ್ಲೆನು; ಅವರು ಈಜಿಪ್ಟಿ
ನವರ ಗುಲಾಮರೆಂದೂ ಬಲ್ಲೆನು; ನಾನು ನನ್ನ ಒಡಂಬಡಿ
ಕೆಯನ್ನು ಜ್ಞಾಪಿಸಿಕೊಂಡಿದ್ದೇನೆ. [6]ಆದ್ದರಿಂದ ನನ್ನ ಈ
ಮಾತುಗಳನ್ನು ಇಸ್ರೇಲರಿಗೆ ತಿಳಿಸು: ‘ನಾನೇ
ಯೆಹೋವನು. ಈಜಿಪ್ಟಿನವರು ನಿಮ್ಮಿಂದ ಮಾಡಿಸುವ
ಬಿಟ್ಟೀಕೆಲಸದಿಂದ ತಪ್ಪಿಸಿ ಈಜಿಪ್ಟಿನವರ ಗುಲಾಮಗಿರಿ
ಯಿಂದ ಬಿಡಿಸುವೆನು. ನನ್ನ ಮಹಾಶಕ್ತಿಯಿಂದ ಈಜಿಪ್ಟಿ
ನವರನ್ನು ಭಯಂಕರವಾಗಿ ದಂಡಿಸುವೆನು; ಬಳಿಕ
ನಿಮ್ಮನ್ನು ರಕ್ಷಿಸುವೆನು. [7]ನೀವು ನನ್ನ ಜನರಾಗಿರುವಿರಿ;
ನಾನು ನಿಮ್ಮ ದೇವರಾಗಿರುವೆನು. ನಿಮ್ಮ ದೇವರಾಗಿರುವ
ಯೆಹೋವನಾದ ನಾನೇ ನಿಮ್ಮನ್ನು ಈಜಿಪ್ಟಿನವರ ಬಿಟ್ಟೀ
ಕೆಲಸದಿಂದ ಬಿಡುಗಡೆಗೊಳಿಸಿದೆನೆಂದು ಆಗ ನೀವು
ತಿಳಿದುಕೊಳ್ಳುವಿರಿ. [8]ಇದಲ್ಲದೆ ಅಬ್ರಹಾಮ, ಇಸಾಕ
ಮತ್ತು ಯಾಕೋಬರಿಗೆ ನಾನು ವಾಗ್ದಾನ ಮಾಡಿದ
ದೇಶಕ್ಕೆ ನಿಮ್ಮನ್ನು ನಡಿಸುವೆನು. ನಾನು ಆ ದೇಶವನ್ನು
ನಿಮಗೆ ಕೊಡುವೆನು. ಅದು ನಿಮ್ಮದಾಗಿರುವುದು. ನಾನೇ
ಯೆಹೋವನು’’’ ಎಂದು ಹೇಳಿದನು.

[9]ಅಂತೆಯೇ ಮೋಶೆಯು ಇಸ್ರೇಲರಿಗೆ ತಿಳಿಸಿದನು.
ಆದರೆ ಜನರು ಬಹು ಪ್ರಯಾಸಪಟ್ಟು ದುಡಿಯುತ್ತಿದ್ದುದ
ರಿಂದ ಮೋಶೆಯ ಮಾತಿಗೆ ಕಿವಿಗೊಡುವಷ್ಟು ತಾಳ್ಮೆ
ಅವರಿಗಿರಲಿಲ್ಲ.

[10]ಆಗ ಯೆಹೋವನು ಮೋಶೆಗೆ, [11]‘‘ಹೋಗು,
ಇಸ್ರೇಲರನ್ನು ಈಜಿಪ್ಟಿನಿಂದ ಕಳುಹಿಸಬೇಕೆಂದು
ಫರೋಹನಿಗೆ ಹೇಳು’’ ಅಂದನು.
[12]ಅದಕ್ಕೆ ಮೋಶೆ, ‘‘ಇಸ್ರೇಲರು ನನ್ನ ಮಾತನ್ನು ಕೇಳು
ವುದಿಲ್ಲ! ಆದ್ದರಿಂದ ಫರೋಹನು ನನ್ನ ಮಾತನ್ನು ಖಂಡಿತ
ವಾಗಿ ಕೇಳುವುದಿಲ್ಲ. ನಾನು ಮಾತಾಡುವುದರಲ್ಲಿ ಜಾಣ
ನಲ್ಲ’’* ಎಂದು ಹೇಳಿದನು.
[13]ಆದರೆ, ಯೆಹೋವನು ಮೋಶೆ ಮತ್ತು ಆರೋನರ
ಸಂಗಡ ಮಾತಾಡಿ ಇಸ್ರೇಲರೊಡನೆಯೂ ಫರೋಹನೊ
ಡನೆಯೂ ಮಾತಾಡಬೇಕೆಂದು ಆಜ್ಞಾಪಿಸಿದನು. ಅಲ್ಲದೆ
ಈಜಿಪ್ಟಿನಿಂದ ಇಸ್ರೇಲರನ್ನು ಬಿಡಿಸಿಕೊಂಡು ಹೋಗ
ಬೇಕೆಂದು ಯೆಹೋವನು ಅವರಿಗೆ ಆಜ್ಞಾಪಿಸಿದನು.

## ಇಸ್ರೇಲರ ಕೆಲವು ಕುಟುಂಬಗಳು

[14]ಇಸ್ರೇಲರ ಕುಟುಂಬಗಳ ನಾಯಕರುಗಳ ಹೆಸರು
ಗಳು ಇಲ್ಲಿವೆ: ಇಸ್ರೇಲನ ಮೊದಲನೆಯ ಮಗನಾದ
ರೂಬೇನನಿಗೆ ನಾಲ್ಕು ಗಂಡುಮಕ್ಕಳಿದ್ದರು. ಅವರು
ಯಾರೆಂದರೆ: ಹನೋಕ್, ಫಲ್ಲು, ಹೆಚ್ರೋನ್ ಮತ್ತು
ಕರ್ಮೀ. [15]ಸಿಮೆಯೋನನ ಗಂಡುಮಕ್ಕಳು
ಯಾರೆಂದರೆ: ಯೆಮೂಯೇಲ್, ಯಾಮೀನ್,
ಓಹದ್, ಯಾಕೀನ್, ಚೋಹರ್ ಮತ್ತು ಸೌಲ.
(ಸೌಲನು ಕಾನಾನ್ಯ ಸ್ತ್ರೀಯ ಮಗನು.) [16]ಲೇವಿಯು
ನೂರಮೂವತ್ತೇಳು ವರ್ಷ ಜೀವಿಸಿದನು. ಲೇವಿಯ
ಗಂಡುಮಕ್ಕಳ ವಂಶಾವಳಿ: ಗೇರ್ಷೋನ್, ಕೆಹಾತ್
ಮತ್ತು ಮೆರಾರೀ. [17]ಗೇರ್ಷೋನನಿಗೆ ಲಿಬ್ನೀ ಮತ್ತು
ಶಿಮ್ಮೀ ಎಂಬ ಇಬ್ಬರು ಗಂಡುಮಕ್ಕಳಿದ್ದರು. [18]ಕೆಹಾತನು
ನೂರಮೂವತ್ತು ಮೂರು ವರ್ಷ ಜೀವಿಸಿದನು. ಕೆಹಾತನ
ಗಂಡುಮಕ್ಕಳು: ಅಮ್ರಾಮ್, ಇಚ್ಹಾರ್, ಹೆಬ್ರೋನ್
ಮತ್ತು ಉಜ್ಜೀಯೇಲ್. [19]ಮೆರಾರೀಯ ಗಂಡು
ಮಕ್ಕಳು: ಮಹ್ಲೀ ಮತ್ತು ಮೂಷೀ. ಇಸ್ರೇಲನ ಮಗನಾದ
ಲೇವಿಯಿಂದುಂಟಾದ ಗೋತ್ರಗಳು ಇವೇ.
[20]ಅಮ್ರಾಮನು ನೂರಮೂವತ್ತೇಳು ವರ್ಷ ಜೀವಿಸಿ
ದನು. ಅಮ್ರಾಮನು ತನ್ನ ತಂದೆಯ ಸಹೋದರಿಯಾದ
ಯೋಕೆಬೆದಳನ್ನು ಮದುವೆಯಾದನು. ಅಮ್ರಾಮ್
ಮತ್ತು ಯೋಕೆಬೆದಳು ಆರೋನ ಮತ್ತು ಮೋಶೆಗೆ ಜನ್ಮ
ವಿತ್ತರು. [21]ಇಚ್ಹಾರನ ಗಂಡುಮಕ್ಕಳು: ಕೋರಹ, ನೆಫೆಗ್
ಮತ್ತು ಜಿಕ್ರಿ. [22]ಉಜ್ಜೀಯೇಲನ ಗಂಡುಮಕ್ಕಳು:
ಮೀಷಾಯೇಲ್, ಎಲ್ಜಾಫಾನ್ ಮತ್ತು ಸಿತ್ರೀ.
[23]ಆರೋನನು ಎಲೀಶೇಬಳನ್ನು ಮದುವೆಯಾದನು.
(ಎಲೀಶೇಬಳು ಅಮ್ಮೀನಾದಾಬನ ಮಗಳು ಮತ್ತು
ನಹಶೋನನ ತಂಗಿ.) ಆರೋನನಿಗೆ ಎಲೀಶೇಬಳಲ್ಲಿ
ನಾದಾಬ್, ಅಬೀಹೂ, ಎಲ್ಲಾಜಾರ್ ಮತ್ತು
ಈತಾಮಾರ್ ಎಂಬ ಗಂಡುಮಕ್ಕಳು ಹುಟ್ಟಿದರು.
[24]ಕೋರಹನ ಗಂಡುಮಕ್ಕಳು: ಅಸ್ಸೀರ್, ಎಲ್ಕಾನಾ
ಮತ್ತು ಅಬೀಯಾಸಾಫ್. ಇವರೇ ಕೋರಹನ ಕುಲಗಳು.
[25]ಆರೋನನ ಮಗನಾದ ಎಲ್ಲಾಜಾರನು ಪೂಟಿಯೇ
ಲನ ಮಗಳನ್ನು ಮದುವೆಯಾದನು; ಆಕೆ ಫೀನೆಹಾಸನಿಗೆ
ಜನ್ಮವಿತ್ತಳು. ಇವರೆಲ್ಲರೂ ಇಸ್ರೇಲನ ಮಗನಾದ
ಲೇವಿಯ ಗೋತ್ರದವರು.
[26]ಮೋಶೆ ಆರೋನರು ಸಹ ಲೇವಿ ಕುಲದವರು.
‘‘ನನ್ನ ಜನರನ್ನು ಗುಂಪುಗುಂಪಾಗಿ* ಈಜಿಪ್ಟಿನಿಂದ
ನಡೆಸಿಕೊಂಡು ಹೋಗಿ’’ ಎಂದು ದೇವರು ಹೇಳಿದ್ದು
ಇವರಿಗೇ. [27]ಇಸ್ರೇಲರು ಈಜಿಪ್ಟಿನಿಂದ ಹೊರಟು
ಹೋಗಲು ಅನುಮತಿ ನೀಡಬೇಕೆಂದು ಈಜಿಪ್ಟಿನ ರಾಜ
ನಾದ ಫರೋಹನೊಂದಿಗೆ ಮಾತಾಡಿದವರು ಮೋಶೆ
ಮತ್ತು ಆರೋನರೇ.

## ಯೆಹೋವನು ಮೋಶೆಯನ್ನು ತಿರುಗಿ ಕರೆದದ್ದು

[28]ಬಳಿಕ ಯೆಹೋವನು ಮೋಶೆಯ ಸಂಗಡ ಈಜಿಪ್ಟಿ
ನಲ್ಲಿ ಮಾತಾಡಿ, [29]‘‘ನಾನು ಯೆಹೋವನು. ನಾನು ನಿನಗೆ
ತಿಳಿಸುವ ಪ್ರತಿಯೊಂದನ್ನು ಈಜಿಪ್ಟಿನ ರಾಜನಿಗೆ ಹೇಳು’’
ಅಂದನು.
[30]ಆದರೆ ಮೋಶೆ ಯೆಹೋವನಿಗೆ, ‘‘ನಾನು ಒಳ್ಳೆಯ
ಮಾತುಗಾರನಲ್ಲ. ರಾಜನು ನನ್ನ ಮಾತನ್ನು ಕೇಳುವನೇ’’
ಎಂದು ಉತ್ತರಿಸಿದನು.

7 ಯೆಹೋವನು ಮೋಶೆಗೆ, ‘‘ನಾನು ನಿನ್ನನ್ನು
ಫರೋಹನಿಗೆ ಮಹಾರಾಜನಂತೆ* ಮಾಡಿರುವೆನು;
ಆರೋನನು ಅಧಿಕೃತ ಮಾತುಗಾರನಾಗಿರುವನು.*
[2]ನಾನು ನಿನಗೆ ಆಜ್ಞಾಪಿಸುವುದನ್ನೆಲ್ಲಾ ಆರೋನನಿಗೆ
ಹೇಳು. ಆಗ ಅವನು ಅವುಗಳನ್ನೆಲ್ಲಾ ರಾಜನಿಗೆ ತಿಳಿಸು
ವನು. ಇಸ್ರೇಲರು ಈ ದೇಶವನ್ನು ಬಿಟ್ಟುಹೋಗುವುದಕ್ಕೆ
ಫರೋಹನು ಸಮ್ಮತಿಸುವನು. [3]ಆದರೆ ನಾನು
ಫರೋಹನ ಹೃದಯವನ್ನು ಕಠಿಣಗೊಳಿಸುವುದರಿಂದ
ಅವನು ನನ್ನ ಆಜ್ಞೆಗಳಿಗೆ ವಿಧೇಯನಾಗುವುದಿಲ್ಲ. ಆಗ
ನಾನು ಈಜಿಪ್ಟಿನಲ್ಲಿ ಅನೇಕ ಅದ್ಭುತಕಾರ್ಯಗಳನ್ನು
ಮಾಡುವೆನು. ಆದರೂ ಅವನು ವಿಧೇಯನಾಗುವುದಿಲ್ಲ.
[4]ಆಗ ನಾನು ಈಜಿಪ್ಟನ್ನು ಭಯಂಕರವಾಗಿ ದಂಡಿಸಿ ನನ್ನ

---

**ಮಾತಾಡುವುದರಲ್ಲಿ ಜಾಣನಲ್ಲ** ಅಥವಾ ‘‘ನಾನು ವಿದೇಶಿಯವನಂತೆ ಮಾತಾಡುತ್ತೇನೆ’’ ಅಕ್ಷರಶಃ ‘‘ನನ್ನ ತುಟಿಗಳಿಗೆ ಸುನ್ನತಿಯಾಗಿಲ್ಲ.’’

**ಗುಂಪುಗುಂಪಾಗಿ** ಇದು ಸೇನೆಯಲ್ಲಿ ಉಪಯೋಗಿಸುವ ಪದ ಪ್ರಯೋಗ, ಇಸ್ರೇಲರು ವ್ಯವಸ್ಥಿತವಾದ ಸೈನ್ಯವಾಗಿದ್ದರು ಎಂದು ಇದು ತೋರಿಸುತ್ತದೆ.

**ಮಹಾರಾಜ** ಅಥವಾ ‘‘ದೇವರು.’’

**ಅಧಿಕೃತ ಮಾತುಗಾರ** ಅಥವಾ ‘‘ಪ್ರವಾದಿ.’’

ಜನರನ್ನು ಆ ದೇಶದಿಂದ ಹೊರತರುವೆನು. [5]ನಾನು ಈಜಿ
ಪ್ಟಿನ ವಿರುದ್ಧವಾಗಿ ನನ್ನ ಕೈಯನ್ನು ಚಾಚಿ ನನ್ನ ಜನರನ್ನು
ಅವರ ದೇಶದಿಂದ ಬಿಡುಗಡೆ ಮಾಡಿದಾಗ, ನಾನೇ
ಯೆಹೋವನೆಂದು ಅವರು ತಿಳಿದುಕೊಳ್ಳುವರು.''

[6]ಯೆಹೋವನು ಆಜ್ಞಾಪಿಸಿದವುಗಳಿಗೆಲ್ಲಾ ಮೋಶೆ
ಆರೋನರು ವಿಧೇಯರಾದರು. [7]ಅವರು ಫರೋಹ
ನೊಡನೆ ಮಾತಾಡಿದಾಗ ಮೋಶೆಗೆ ಎಂಭತ್ತು ವರ್ಷ ವಯ
ಸ್ಸಾಗಿತ್ತು. ಆರೋನನಿಗೆ ಎಂಭತ್ತ ಮೂರು ವರ್ಷ
ವಯಸ್ಸಾಗಿತ್ತು.

[8]ಯೆಹೋವನು ಮೋಶೆ ಆರೋನರಿಗೆ, [9] ''ಫರೋ
ಹನು ನಿಮಗೆ, ಅದ್ಭುತಕಾರ್ಯವೊಂದನ್ನು ಮಾಡಿ ನಿಮ್ಮ
ಅಧಿಕಾರವನ್ನು ರುಜುವಾತುಪಡಿಸಬೇಕೆಂದು ಕೇಳು
ವನು. ಆಗ ಮೋಶೆಯು ಆರೋನನಿಗೆ ಊರು
ಗೋಲನ್ನು ನೆಲದ ಮೇಲೆ ಬಿಸಾಡಲು ಹೇಳಬೇಕು.
ಆರೋನನು ಬಿಸಾಡಿದ ಕೂಡಲೇ ಆ ಕೋಲು ಅವರ
ಕಣ್ಣೆದುರಿನಲ್ಲಿಯೇ ಸರ್ಪವಾಗುವುದು'' ಅಂದನು.

### ಊರುಗೋಲು ಸರ್ಪವಾಯಿತು

[10]ಆದ್ದರಿಂದ ಮೋಶೆ ಆರೋನರು ಫರೋಹನ ಬಳಿಗೆ
ಹೋದರು. ಯೆಹೋವನು ಆಜ್ಞಾಪಿಸಿದ್ದಂತೆಯೇ
ಅವರು ಮಾಡಿದರು. ಆರೋನನು ತನ್ನ ಊರುಗೋ
ಲನ್ನು ಫರೋಹನ ಮತ್ತು ಅವನ ಅಧಿಕಾರಿಗಳ ಮುಂದೆ
ನೆಲದ ಮೇಲೆ ಬಿಸಾಡಿದಾಗ ಅದು ಸರ್ಪವಾಯಿತು.

[11]ಆಗ ರಾಜನು ತನ್ನ ವಿದ್ವಾಂಸರನ್ನೂ ಮಂತ್ರಗಾರ
ರನ್ನೂ ಕರೆಯಿಸಿದನು. ಅವರು ತಮ್ಮ ಮಂತ್ರವಿದ್ಯೆಯನ್ನು
ಅದೇ ರೀತಿ ಮಾಡಿದರು. [12]ಅವರು ತಮ್ಮ ಊರು
ಗೋಲುಗಳನ್ನು ನೆಲದ ಮೇಲೆ ಬಿಸಾಡಿದಾಗ ಅವು ಸರ್ಪ
ಗಳಾದವು. ಆದರೆ ಆರೋನನ ಕೋಲು ಅವರ ಕೋಲು
ಗಳನ್ನು ನುಂಗಿಬಿಟ್ಟಿತು. [13]ಯೆಹೋವನು ಹೇಳಿ
ದ್ದಂತೆಯೇ ಫರೋಹನ ಹೃದಯವು ಕಠಿಣವಾಯಿತು.
ಅವನು ಮೋಶೆ ಮತ್ತು ಆರೋನರ ಮಾತಿಗೆ ಕಿವಿ
ಗೊಡಲಿಲ್ಲ.

### ನೀರು ರಕ್ತವಾದದ್ದು

[14]ಆಗ ಯೆಹೋವನು ಮೋಶೆಗೆ, ''ಫರೋಹನ
ಹೃದಯ ಮೊಂಡಾಗಿದೆ; ಅವನು ಜನರನ್ನು ಹೋಗಗೊಡಿ
ಸುವುದಿಲ್ಲ. [15]ಮುಂಜಾನೆ ಅವನು ನದಿಗೆ ಹೋಗುವನು.
ಸರ್ಪವಾಗಿ ಮಾರ್ಪಾಟಾದ ಊರುಗೋಲನ್ನು ತೆಗೆದು
ಕೊಂಡು ನದಿಯ ತೀರಕ್ಕೆ ಹೋಗಿ ಅವನನ್ನು ಭೇಟಿ
ಯಾಗಿ ಅವನಿಗೆ, [16]'ಇಬ್ರಿಯರ ದೇವರಾದ
ಯೆಹೋವನು ನನ್ನನ್ನು ನಿನ್ನ ಬಳಿಗೆ ಕಳುಹಿಸಿದ್ದಾನೆ.
ಆತನ ಜನರು ಅರಣ್ಯದಲ್ಲಿ ಆತನನ್ನು ಆರಾಧಿಸುವುದಕ್ಕೆ
ನೀನು ಅವರಿಗೆ ಅಪ್ಪಣೆಕೊಡಬೇಕೆಂದು ಆತನು ನಿನಗೆ
ಆಜ್ಞಾಪಿಸುತ್ತಾನೆ. ಇದುವರೆಗೆ ನೀನು ಯೆಹೋವನ
ಮಾತಿಗೆ ಕಿವಿಗೊಡಲಿಲ್ಲ. [17]ಆದ್ದರಿಂದ ಆತನೇ
ಯೆಹೋವನೆಂದು ನಿನಗೆ ತಿಳಿಯಲೆಂದು ನನ್ನ ಕೈಯಲ್ಲಿ
ರುವ ಕೋಲಿನಿಂದ ನೈಲ್ ನದಿಯ ನೀರನ್ನು ಹೊಡೆಯು
ವೆನು; ಆ ನದಿಯ ನೀರು ರಕ್ತವಾಗುವುದು. [18]ನದಿಯ
ಲ್ಲಿರುವ ಮೀನುಗಳು ಸಾಯುವವು; ನದಿಯು ಹೊಲಸಾ
ಗುವುದು; ಈಜಿಪ್ಟಿನವರು ನದಿಯ ನೀರನ್ನು ಕುಡಿಯ
ಲಾಗುವುದಿಲ್ಲ' ಎಂದು ಹೇಳಬೇಕು'' ಅಂದನು.

[19]ಯೆಹೋವನು ಮೋಶೆಗೆ, ''ನೀನು ಆರೋನನಿಗೆ,
'ನಿನ್ನ ಕೈಯಲ್ಲಿರುವ ಊರುಗೋಲನ್ನು ನದಿಗಳ, ಕಾಲು
ವೆಗಳ, ಕೆರೆಗಳ ಮತ್ತು ನೀರಿರುವ ಪ್ರತಿಯೊಂದು ಸ್ಥಳದ
ಮೇಲೆ ಚಾಚು' ಎಂದು ಹೇಳು. ಅವನು ಚಾಚಿದಾಗ
ನೀರೆಲ್ಲಾ ರಕ್ತವಾಗುವುದು. ಮರದ ಮತ್ತು ಕಲ್ಲಿನ ಪಾತ್ರೆ
ಗಳಲ್ಲಿರುವ ನೀರು ಸಹ ರಕ್ತವಾಗುವುದು'' ಎಂದು
ಹೇಳಿದನು.

[20]ಯೆಹೋವನು ಆಜ್ಞಾಪಿಸಿದಂತೆಯೇ ಮೋಶೆ
ಆರೋನರು ಮಾಡಿದರು. ಆರೋನನು ಫರೋಹನ
ಮತ್ತು ಅವನ ಅಧಿಕಾರಿಗಳ ಮುಂದೆ ಕೋಲನ್ನು ಎತ್ತಿ
ನೈಲ್ ನದಿಯ ನೀರನ್ನು ಹೊಡೆದನು. ಆಗ ನದಿಯ
ನೀರೆಲ್ಲಾ ರಕ್ತವಾಯಿತು. [21]ನದಿಯಲ್ಲಿದ್ದ ಮೀನುಗಳು
ಸತ್ತವು; ನದಿಯು ಹೊಲಸಾಗತೊಡಗಿತು. ಆದ್ದರಿಂದ
ಈಜಿಪ್ಟಿನವರು ನದಿಯ ನೀರನ್ನು ಕುಡಿಯಲಾಗಲಿಲ್ಲ.
ಈಜಿಪ್ಟಿನ ನೀರೆಲ್ಲಾ ರಕ್ತವೇ ಆಗಿತ್ತು.

[22]ಮಾಂತ್ರಿಕರು ತಮ್ಮ ಮಂತ್ರವಿದ್ಯೆಯಿಂದ ಅದೇ ರೀತಿ
ಮಾಡಿದರು. ಆದ್ದರಿಂದ ಫರೋಹನು ಮೋಶೆ
ಆರೋನರ ಮಾತನ್ನು ಕೇಳಲಿಲ್ಲ. ಯೆಹೋವನು ಹೇಳಿ
ದಂತೆಯೇ ಇದಾಯಿತು. [23]ಫರೋಹನು ತನ್ನ ಮನೆಗೆ
ಹೊರಟುಹೋದನು. ಮೋಶೆ ಆರೋನರು ಮಾಡಿದ
ಮಹತ್ಕಾರ್ಯಗಳನ್ನು ಲಕ್ಷ್ಯಕ್ಕೆ ತೆಗೆದುಕೊಳ್ಳಲಿಲ್ಲ.

[24]ಈಜಿಪ್ಟಿನವರು ನದಿಯ ನೀರನ್ನು ಕುಡಿಯಲಾಗ
ಲಿಲ್ಲ. ಆದ್ದರಿಂದ ಅವರು ನದಿಯ ಸುತ್ತಲೂ ಕುಡಿಯುವ
ನೀರಿಗಾಗಿ ಬಾವಿಗಳನ್ನು ಅಗೆದರು.

### ಕಪ್ಪೆಗಳಿಂದ ಬಾಧೆ

[25]ಯೆಹೋವನು ನೈಲ್ ನದಿಯ ನೀರನ್ನು ರಕ್ತವನ್ನಾಗಿ
ಮಾರ್ಪಡಿಸಿದ ಬಳಿಕ ಏಳು ದಿನಗಳು ಕಳೆದವು.

8 ಆಗ ಯೆಹೋವನು ಮೋಶೆಗೆ, ''ಫರೋಹನ ಬಳಿಗೆ
ಹೋಗಿ ಯೆಹೋವನು ಹೀಗನ್ನುತ್ತಾನೆ ಎಂದು
ಹೇಳು: 'ನನ್ನನ್ನು ಆರಾಧಿಸುವುದಕ್ಕೆ ನನ್ನ ಜನರು
ಹೋಗಲಿ. [2]ನನ್ನ ಜನರನ್ನು ನೀನು ಹೋಗಗೊಡಿಸ
ದಿದ್ದರೆ ನಾನು ಈಜಿಪ್ಟನ್ನು ಕಪ್ಪೆಗಳಿಂದ ತುಂಬಿಸುವೆನು.

3ನೈಲ್ ನದಿಯು ಕಪ್ಪೆಗಳಿಂದ ತುಂಬಿ ಹೋಗುವುದು.
ಕಪ್ಪೆಗಳು ನದಿಯಿಂದ ಬಂದು ನಿಮ್ಮ ಮನೆಗಳನ್ನು
ಪ್ರವೇಶಿಸುವವು; ನಿಮ್ಮ ಮಲಗುವ ಕೋಣೆಯಲ್ಲಿಯೂ
ನಿಮ್ಮ ಹಾಸಿಗೆಗಳಲ್ಲಿಯೂ ನಿಮ್ಮ ಅಧಿಕಾರಿಗಳ ಮನೆ
ಗಳಲ್ಲಿಯೂ ನಿಮ್ಮ ಒಲೆಗಳಲ್ಲಿಯೂ ನೀರಿನ ಜಾಡಿಗಳ
ಲ್ಲಿಯೂ ಇರುವವು; 4ನಿನ್ನ ಮೇಲೆಯೂ ನಿನ್ನ ಪ್ರಜೆಗಳ
ಮೇಲೆಯೂ ನಿನ್ನ ಅಧಿಕಾರಿಗಳ ಮೇಲೆಯೂ
ಇರುವವು’’’ ಅಂದನು.

5ಬಳಿಕ ಯೆಹೋವನು ಮೋಶೆಗೆ, ‘‘ನೀನು ಆರೋನ
ನಿಗೆ, ‘ನಿನ್ನ ಕೋಲನ್ನು ಹಿಡಿದುಕೊಂಡು ಹೊಳೆಗಳ,
ಕಾಲುವೆಗಳ ಮತ್ತು ಕೆರೆಗಳ ಮೇಲೆ ಕೈಚಾಚು’ ಎಂದು
ಹೇಳು. ಆಗ ಈಜಿಪ್ಟ್ ದೇಶದ ಮೇಲೆ ಕಪ್ಪೆಗಳು ಹೊರ
ಬರುವವು’’ ಎಂದು ಹೇಳಿದನು.

6ಅಂತೆಯೇ ಆರೋನನು ಈಜಿಪ್ಟಿನ ನೀರುಗಳ ಮೇಲೆ
ತನ್ನ ಕೈಯನ್ನು ಚಾಚಿದಾಗ ಕಪ್ಪೆಗಳು ನೀರುಗಳಿಂದ ಹೊರ
ಬಂದು ಈಜಿಪ್ಟ್ ದೇಶವನ್ನು ಆವರಿಸಿಕೊಳ್ಳ
ತೊಡಗಿದವು.

7ಮಾಂತ್ರಿಕರು ತಮ್ಮ ಮಂತ್ರವಿದ್ಯೆಯಿಂದ ಅದೇ ರೀತಿ
ಮಾಡಿ ಈಜಿಪ್ಟ್ ದೇಶದ ಮೇಲೆ ಕಪ್ಪೆಗಳನ್ನು ಬರ
ಮಾಡಿದರು.

8ಫರೋಹನು ಮೋಶೆ ಆರೋನರನ್ನು ಕರೆಯಿಸಿ,
‘‘ನನ್ನಿಂದ ಮತ್ತು ನನ್ನ ಜನರ ಮೇಲಿಂದ ಕಪ್ಪೆಗಳನ್ನು
ತೊಲಗಿಸಬೇಕೆಂದು ಯೆಹೋವನನ್ನುಕೇಳಿಕೊಳ್ಳಿರಿ.
ಯೆಹೋವನಿಗೆ ಯಜ್ಞಗಳನ್ನು ಸಮರ್ಪಿಸಲು ನಾನು
ಆತನ ಜನರನ್ನು ಹೋಗಗೊಡಿಸುವೆನು’’ ಎಂದು
ಹೇಳಿದನು.

9ಮೋಶೆಯು ಫರೋಹನಿಗೆ, ‘‘ಕಪ್ಪೆಗಳು ಯಾವಾಗ
ಬಿಟ್ಟುಹೋಗಬೇಕೆಂದು ತಿಳಿಸು. ನಾನು ನಿನಗೋಸ್ಕರ,
ನಿನ್ನ ಜನರಿಗೋಸ್ಕರ ಮತ್ತು ನಿನ್ನ ಅಧಿಕಾರಿಗಳಿಗೋಸ್ಕರ
ಪ್ರಾರ್ಥಿಸುವೆನು. ಆಗ ಕಪ್ಪೆಗಳು ನಿನ್ನನ್ನೂ ನಿನ್ನ ಮನೆ
ಗಳನ್ನೂ ಬಿಟ್ಟುಹೋಗಿ ನದಿಯಲ್ಲಿ ಮಾತ್ರ ಉಳಿ
ಯುತ್ತವೆ’’ ಎಂದು ಹೇಳಿದನು.

10ಅದಕ್ಕೆ ಫರೋಹನು, ‘‘ನಾಳೆ’’ ಅಂದನು.

ಮೋಶೆ, ‘‘ನೀನು ಹೇಳಿದಂತೆಯೇ ಆಗುವುದು. ನಮ್ಮ
ದೇವರಾದ ಯೆಹೋವನಿಗೆ ಸಮಾನನಾದ ದೇವರೇ
ಇಲ್ಲವೆಂದು ನೀನು ತಿಳಿದುಕೊಳ್ಳುವೆ. 11ಕಪ್ಪೆಗಳು
ನಿನ್ನನ್ನೂ ನಿನ್ನ ಮನೆಗಳನ್ನೂ ನಿನ್ನ ಅಧಿಕಾರಿಗಳನ್ನೂ ನಿನ್ನ
ಜನರನ್ನೂ ಬಿಟ್ಟುಹೋಗಿ ನದಿಯಲ್ಲಿ ಮಾತ್ರ ಉಳಿದು
ಕೊಳ್ಳುವವು’’ ಎಂದು ಹೇಳಿದನು.

12ಮೋಶೆ ಆರೋನರು ಫರೋಹನ ಬಳಿಯಿಂದ
ಹೋದರು. ಫರೋಹನ ವಿರುದ್ಧವಾಗಿ ಕಳುಹಿಸಿದ
ಕಪ್ಪೆಗಳನ್ನು ತೊಲಗಿಸಬೇಕೆಂದು ಮೋಶೆಯು
ಯೆಹೋವನಿಗೆ ಪ್ರಾರ್ಥಿಸಿದನು. 13ಯೆಹೋವನು
ಮೋಶೆಯ ಬೇಡಿಕೆಯನ್ನು ಅನುಗ್ರಹಿಸಿದನು. ಕಪ್ಪೆಗಳು
ಮನೆಗಳಲ್ಲಿಯೂ ಅಂಗಳಗಳಲ್ಲಿಯೂ ಹೊಲಗಳ
ಲ್ಲಿಯೂ ಸತ್ತು ಹೋದವು. 14ಅವುಗಳನ್ನು ಕೂಡಿಸಿದಾಗ
ರಾಶಿರಾಶಿಗ ಳಾದವು. ದೇಶವು ದುರ್ವಾಸನೆಯಿಂದ
ತುಂಬಿ ಹೋಯಿತು.

15ಕಪ್ಪೆಗಳಿಂದ ಬಿಡುಗಡೆಯಾದದ್ದನ್ನು ಫರೋಹನು
ಕಂಡು ಮತ್ತೆ ತನ್ನ ಹೃದಯವನ್ನು ಕಠಿಣ ಪಡಿಸಿಕೊಂಡನು.
ಮೋಶೆ ಆರೋನರ ಬೇಡಿಕೆಯನ್ನು ಅವನು
ಈಡೇರಿಸಲಿಲ್ಲ. ಯೆಹೋವನು ಹೇಳಿದಂತೆಯೇ
ಇದಾಯಿತು.

## ಹೇನುಗಳು

16ಬಳಿಕ ಯೆಹೋವನು ಮೋಶೆಗೆ, ‘‘ನೀನು ಆರೋನ
ನಿಗೆ, ‘ನಿನ್ನ ಕೋಲನ್ನು ಎತ್ತಿ ನೆಲದ ಧೂಳನ್ನು ಹೊಡೆ’
ಎಂದು ಹೇಳು. ಆಗ ಧೂಳು ಈಜಿಪ್ಟಿನಲ್ಲೆಲ್ಲಾ ಹೇನುಗ
ಳಾಗುವುವು’’ ಎಂದು ಹೇಳಿದನು.

17ಅವರು ಹಾಗೆಯೇ ಮಾಡಿದರು. ಆರೋನನು ತನ್ನ
ಕೈಯಲ್ಲಿದ್ದ ಕೋಲನ್ನು ಎತ್ತಿ ನೆಲದ ಧೂಳನ್ನು ಹೊಡೆ
ದನು. ಆಗ ಈಜಿಪ್ಟಿನ ಪ್ರತಿಯೊಂದು ಸ್ಥಳದ ಧೂಳು
ಹೇನುಗಳಾಗಿ ಪ್ರಾಣಿಗಳ ಮೇಲೂ ಜನರ ಮೇಲೂ ಏರಿ
ಕೊಂಡವು.

18ಮಾಂತ್ರಿಕರು ತಮ್ಮ ಮಂತ್ರವಿದ್ಯೆಯಿಂದ ಅದೇ ರೀತಿ
ಮಾಡಲು ಪ್ರಯತ್ನಿಸಿದರೂ ಧೂಳಿನಿಂದ ಹೇನುಗಳನ್ನು
ಮಾಡಲು ಅವರಿಗೆ ಸಾಧ್ಯವಾಗಲಿಲ್ಲ. ಹೇನುಗಳು ಪ್ರಾಣಿ
ಗಳ ಮೇಲೂ ಜನರ ಮೇಲೂ ಉಳಿದುಕೊಂಡವು.
19ಆದ್ದರಿಂದ ಮಾಂತ್ರಿಕರು ಫರೋಹನಿಗೆ, ‘‘ಇದು
ದೇವರ ಕಾರ್ಯವೇ’’ ಎಂದು ಹೇಳಿದರು. ಆದರೆ
ಫರೋಹನು ಅವರ ಮಾತಿಗೆ ಕಿವಿಗೊಡಲಿಲ್ಲ.
ಯೆಹೋವನು ಹೇಳಿದಂತೆಯೇ ಇದಾಯಿತು.

## ಹುಳುಗಳು

20ಯೆಹೋವನು ಮೋಶೆಗೆ, ‘‘ಬೆಳಿಗ್ಗೆ ಎದ್ದು
ಫರೋಹನ ಬಳಿಗೆ ಹೋಗು. ಫರೋಹನು ನದಿಗೆ
ಹೋಗುವನು. ನೀನು ಅವನಿಗೆ, ‘ಯೆಹೋವನು ಇಂತೆ
ನ್ನುತ್ತಾನೆ: ನನ್ನ ಜನರು ಹೋಗಿ ನನ್ನನ್ನು ಆರಾಧಿಸಲಿ!
21ನೀನು ನನ್ನ ಜನರನ್ನು ಹೋಗಗೊಡಿಸದಿದ್ದರೆ, ಹುಳ
ಗಳು ನಿನ್ನ ಮೇಲೆಯೂ ನಿನ್ನ ಅಧಿಕಾರಿಗಳ ಮೇಲೆಯೂ
ನಿನ್ನ ಜನರ ಮೇಲೆಯೂ ನಿಮ್ಮ ಮನೆಗಳಲ್ಲಿಯೂ ತುಂಬಿ
ಕೊಳ್ಳುವವು; ನೆಲದ ಮೇಲೆಲ್ಲಾ ಇರುವವು. 22ಆದರೆ
ನಾನು ಈಜಿಪ್ಟಿನವರೊಡನೆ ವರ್ತಿಸುವಂತೆ

ಇಸ್ರೇಲರೊಡನೆ ವರ್ತಿಸುವುದಿಲ್ಲ. ನನ್ನ ಜನರು ವಾಸಿ
ಸುವ ಗೋಷೆನ್ ಪ್ರದೇಶದಲ್ಲಿ ಯಾವ ಹುಳವೂ ಇರುವು
ದಿಲ್ಲ. ನಾನೇ ಭೂಲೋಕವನ್ನು ಆಳುವ ಯೆಹೋವ
ನೆಂದು ಆಗ ನೀನು ತಿಳಿದುಕೊಳ್ಳುವೆ. 23 ಆದ್ದರಿಂದ ನಾಳಿ
ನನ್ನ ಜನಕ್ಕೂ ನಿನ್ನ ಜನಕ್ಕೂ ವ್ಯತ್ಯಾಸ ಮಾಡುವೆನು. ಅದೇ
ನನ್ನ ಸಾಕ್ಷಿ' ಎಂದು ಹೇಳಬೇಕು'' ಎಂದು ಹೇಳಿದನು.
24 ಯೆಹೋವನು ತಾನು ಹೇಳಿದಂತೆಯೇ ಮಾಡಿ
ದನು. ಲೆಕ್ಕವಿಲ್ಲದಷ್ಟು ಹುಳಗಳು ಈಜಿಪ್ಟಿಗೆ ಬಂದು
ಫರೋಹನ ಮನೆಯಲ್ಲಿಯೂ ಅವನ ಅಧಿಕಾರಿಗಳ ಮನೆ
ಗಳಲ್ಲಿಯೂ ತುಂಬಿಕೊಂಡವು. ಇಡೀ ಈಜಿಪ್ಟನ್ನೇ ಅವು
ತುಂಬಿಕೊಂಡದ್ದರಿಂದ ದೇಶವು ಹಾಳಾಯಿತು. 25 ಆಗ
ಫರೋಹನು ಮೋಶೆ ಆರೋನರನ್ನು ಕರೆಯಿಸಿ, ''ನಿಮ್ಮ
ದೇವರಿಗೆ ಈ ದೇಶದಲ್ಲಿಯೇ ಯಜ್ಞಗಳನ್ನು ಅರ್ಪಿಸಿರಿ''
ಎಂದು ಹೇಳಿದನು.
26 ಅದಕ್ಕೆ ಮೋಶೆ, ''ಅದು ಸರಿಯಲ್ಲ. ನಮ್ಮ ದೇವ
ರಾದ ಯೆಹೋವನಿಗೆ ನಾವು ಅರ್ಪಿಸುವ ಯಜ್ಞಗಳು
ಈಜಿಪ್ಟಿನವರಿಗೆ ನಿಷಿದ್ಧವಾಗಿವೆ. ಹೀಗಿರಲು ಅವರ ಕಣ್ಣೆ
ದುರಿಗೇ ಅಂಥ ಯಜ್ಞಗಳನ್ನು ಅರ್ಪಿಸಿದರೆ, ಅವರು
ನಮ್ಮನ್ನು ಕಲ್ಲೆಸೆದು ಕೊಲ್ಲುವುದಿಲ್ಲವೇ? 27 ನಾವು ಅರಣ್ಯ
ದಲ್ಲಿ ಮೂರು ದಿನ ಪ್ರಯಾಣ ಮಾಡಿ ನಮ್ಮ ದೇವರಾದ
ಯೆಹೋವನಿಗೆ ಯಜ್ಞಗಳನ್ನು ಸಮರ್ಪಿಸುವಂತಾಗಲಿ.
ಹೀಗೆ ಮಾಡಲು ಯೆಹೋವನೇ ನಮಗೆ ಹೇಳಿದ್ದಾನೆ''
ಅಂದನು.
28 ಅದಕ್ಕೆ ಫರೋಹನು, ''ಅರಣ್ಯದಲ್ಲಿ ನಿಮ್ಮ ದೇವ
ರಾದ ಯೆಹೋವನಿಗೆ ಯಜ್ಞಗಳನ್ನು ಅರ್ಪಿಸಲು ನಾನು
ನಿಮಗೆ ಅಪ್ಪಣೆ ಕೊಡುವೆನು; ಆದರೆ ಬಹುದೂರ ಹೋಗ
ಬೇಡಿ; ಈಗ ಹೋಗಿ ನನಗೋಸ್ಕರ ಪ್ರಾರ್ಥಿಸಿರಿ''
ಅಂದನು.
29 ಅದಕ್ಕೆ ಮೋಶೆ,''ನಾನು ಇಲ್ಲಿಂದ ಹೋದಾಗ,
ನಿನಗೂ ನಿನ್ನ ಪ್ರಜೆಗಳಿಗೂ ನಿನ್ನ ಅಧಿಕಾರಿಗಳಿಗೂ ಹುಳ
ಗಳ ಬಾಧೆ ನಾಳೆಯಿಂದ ಇರಬಾರದೆಂಬುದಾಗಿ
ಯೆಹೋವನಿಗೆ ಪ್ರಾರ್ಥಿಸುವೆನು. ಆದರೆ ಮತ್ತೆ ನೀನು
ವಂಚಿಸಿ ಜನರು ಯಜ್ಞಗಳನ್ನು ಸಮರ್ಪಿಸದಂತೆ ತಡೆಯ
ಬಾರದು'' ಎಂದು ಹೇಳಿದನು.
30 ಮೋಶೆಯು ಫರೋಹನ ಬಳಿಯಿಂದ ಹೋಗಿ
ಯೆಹೋವನಿಗೆ ಪ್ರಾರ್ಥಿಸಿದನು. 31 ಯೆಹೋವನು
ಮೋಶೆಯ ಬೇಡಿಕೆಯನ್ನು ಅನುಗ್ರಹಿಸಿದನು.
ಯೆಹೋವನು ಫರೋಹನಿಂದಲೂ ಅವನ ಅಧಿಕಾರಿಗ
ಳಿಂದಲೂ ಅವನ ಜನರಿಂದಲೂ ಹುಳಗಳನ್ನು ತೊಲಗಿ
ಸಿದನು. ಯಾವ ಹುಳಗಳು ಉಳಿಯಲಿಲ್ಲ. 32 ಆದರೆ
ಫರೋಹನು ಮತ್ತೆ ತನ್ನ ಹೃದಯವನ್ನು ಕಠಿಣಪಡಿಸಿ
ಕೊಂಡು ಜನರನ್ನು ಹೋಗಗೊಡಿಸಲಿಲ್ಲ.

## ಹೊಲದ ಪ್ರಾಣಿಗಳ ವ್ಯಾಧಿ

9 ಆಗ ಯೆಹೋವನು ಮೋಶೆಗೆ, ''ನೀನು
ಫರೋಹನ ಬಳಿಗೆ ಹೋಗಿ ಅವನಿಗೆ ಹೀಗೆ ಹೇಳು:
'ಇಬ್ರಿಯರ ದೇವರಾದ ಯೆಹೋವನು ಹೇಳುವುದೇ
ನೆಂದರೆ, ನನ್ನನ್ನು ಆರಾಧಿಸುವುದಕ್ಕೆ ನನ್ನ ಜನರು
ಹೋಗಲಿ. 2 ನೀನು ಅವರನ್ನು ಬಿಡದೆ ಇನ್ನೂ ತಡೆದರೆ,
3 ನಾನು ಕೈಯೆತ್ತಿ ಹೊಲಗಳಲ್ಲಿರುವ ನಿನ್ನ ಪಶುಗಳನ್ನೂ
ನಿನ್ನ ಎಲ್ಲಾ ಕುದುರೆಗಳನ್ನೂ ಕತ್ತೆಗಳನ್ನೂ ಒಂಟೆಗಳನ್ನೂ
ದನಕರುಗಳನ್ನೂ ಕುರಿಗಳನ್ನೂ ಘೋರವ್ಯಾಧಿಯಿಂದ
ಸಾಯಿಸುವೆನು. 4 ಆದರೆ ಇಸ್ರೇಲರ ಪಶುಗಳಿಗೂ ಈಜಿಪ್ಟಿ
ನವರ ಪಶುಗಳಿಗೂ ವ್ಯತ್ಯಾಸ ಮಾಡುವೆನು. ಇಸ್ರೇಲರ
ಯಾವ ಪಶುವೂ ಸಾಯುವುದಿಲ್ಲ. 5 ಇದು ನಡೆಯತಕ್ಕ
ಕಾಲವನ್ನು ನಿರ್ಣಯಿಸಿ ನಾಳೆಯೇ ಇದನ್ನು ಕಾರ್ಯ
ರೂಪಕ್ಕೆ ತರುವೆನು' ಎಂದು ಹೇಳಬೇಕು'' ಅಂದನು.
6 ಮರುದಿನ ಯೆಹೋವನು ಈ ಕಾರ್ಯವನ್ನು ಮಾಡಿ
ದನು. ಈಜಿಪ್ಟಿನ ಹೊಲಗಳಲ್ಲಿದ್ದ ಪಶುಗಳೆಲ್ಲಾ ಸತ್ತು
ಹೋದವು; ಆದರೆ ಇಸ್ರೇಲರಿಗೆ ಸೇರಿದ ಯಾವ ಪಶುವೂ
ಸಾಯಲಿಲ್ಲ. 7 ಇಸ್ರೇಲರ ಯಾವ ಪಶುವಾದರೂ ಸತ್ತಿ
ದೆಯೋ ಎಂದು ತಿಳಿದುಕೊಳ್ಳಲು ಫರೋಹನು ಜನ
ರನ್ನು ಕಳುಹಿಸಿದನು. ಇಸ್ರೇಲರ ಪಶುಗಳಲ್ಲಿ ಒಂದಾ
ದರೂ ಸತ್ತಿರಲಿಲ್ಲ. ಆದರೂ ಫರೋಹನು ತನ್ನ ಹೃದಯ
ವನ್ನು ಕಠಿಣಪಡಿಸಿಕೊಂಡದ್ದರಿಂದ ಇಸ್ರೇಲರನ್ನು
ಹೋಗಗೊಡಿಸಲಿಲ್ಲ.

## ಹುಣ್ಣುಗಳು

8 ಯೆಹೋವನು ಮೋಶೆ ಆರೋನರಿಗೆ, ''ನೀವು
ಒಲೆಯ ಬೂದಿಯನ್ನು ಕೈತುಂಬ ತೆಗೆದುಕೊಳ್ಳಿರಿ.
ಮೋಶೆಯು ಅದನ್ನು ಫರೋಹನ ಮುಂದೆ ಗಾಳಿಯಲ್ಲಿ
ತೂರಲಿ. 9 ಅದು ಧೂಳಾಗಿ ಈಜಿಪ್ಟಿನಲ್ಲೆಲ್ಲಾ ಹರಡಿ
ಕೊಳ್ಳುವುದು; ಈ ಧೂಳು ಈಜಿಪ್ಟಿನಲ್ಲಿರುವ ಮನುಷ್ಯರ
ನ್ನಾಗಲೀ ಪಶುಗಳನ್ನಾಗಲೀ ತಾಗಿದಾಗ ಅವರ ಚರ್ಮದ
ಮೇಲೆ ಹುಣ್ಣುಗಳಾಗುತ್ತವೆ'' ಎಂದು ಹೇಳಿದನು.
10 ಆದ್ದರಿಂದ ಮೋಶೆ ಆರೋನರು ಒಲೆಯಿಂದ
ಬೂದಿಯನ್ನು ತೆಗೆದುಕೊಂಡು ಹೋಗಿ ಫರೋಹನ
ಮುಂದೆ ನಿಂತುಕೊಂಡರು. ಅವರು ಬೂದಿಯನ್ನು ಗಾಳಿ
ಯಲ್ಲಿ ತೂರಿದಾಗ ಜನರ ಮೇಲೂ ಪ್ರಾಣಿಗಳ ಮೇಲೂ
ಹುಣ್ಣುಗಳಾಗತೊಡಗಿದವು. 11 ಮೋಶೆಯ ಈ ಕಾರ್ಯ
ವನ್ನು ವಿಫಲಗೊಳಿಸಲು ಮಾಂತ್ರಿಕರಿಗೆ ಸಾಧ್ಯವಾಗಲಿಲ್ಲ.
ಯಾಕಂದರೆ ಈಜಿಪ್ಟಿನ ಎಲ್ಲಾ ಜನರಂತೆ ಮಾಂತ್ರಿಕರ
ಮೇಲೆಯೂ ಹುಣ್ಣುಗಳಾದವು. 12 ಆದರೆ ಯೆಹೋವನು
ಫರೋಹನ ಹೃದಯವನ್ನು ಕಠಿಣಗೊಳಿಸಿದ್ದರಿಂದ

ಫರೋಹನು ಮೋಶೆ ಆರೋನರ ಮಾತನ್ನು ಕೇಳಲಿಲ್ಲ.
ಯೆಹೋವನು ಹೇಳಿದಂತೆಯೇ ಇದಾಯಿತು.

### ಆಲಿಕಲ್ಲು

13ಬಳಿಕ ಯೆಹೋವನು ಮೋಶೆಗೆ, ‘‘ಮುಂಜಾನೆ
ಎದ್ದು ಫರೋಹನ ಬಳಿಗೆ ಹೋಗಿ, ಅವನಿಗೆ, ‘ಇಬ್ರಿಯರ
ದೇವರಾದ ಯೆಹೋವನು ಹೀಗನ್ನುತ್ತಾನೆ; ನನ್ನನ್ನು ಆರಾ
ಧಿಸಲು ನನ್ನ ಜನರು ಹೋಗಲಿ! 14ಇಲ್ಲವಾದರೆ, ನಾನು
ನಿನ್ನ ವಿರುದ್ಧವಾಗಿಯೂ ನಿನ್ನ ಅಧಿಕಾರಿಗಳ ವಿರುದ್ಧ
ವಾಗಿಯೂ ನಿನ್ನ ಜನರ ವಿರುದ್ಧವಾಗಿಯೂ ನನ್ನ ಪೂರ್ಣ
ಶಕ್ತಿಯಿಂದ ಉಪದ್ರವಗಳನ್ನು ಕಳುಹಿಸುವೆನು. ಆಗ
ನನ್ನಂಥ ದೇವರು ಲೋಕದಲ್ಲಿ ಇಲ್ಲವೇ ಇಲ್ಲವೆಂದು
ನೀನು ತಿಳಿದುಕೊಳ್ಳುವೆ. 15ನಾನು ನನ್ನ ಶಕ್ತಿಯಿಂದ
ನಿನಗೂ ನಿನ್ನ ಜನರಿಗೂ ವ್ಯಾಧಿಯನ್ನು ಬರಮಾಡಿ
ನಿಮ್ಮನ್ನು ನಿರ್ಮೂಲ ಮಾಡಬಹುದಿತ್ತು. 16ಆದರೆ, ನನ್ನ
ಶಕ್ತಿಯನ್ನು ನಿನಗೆ ತೋರಿಸಬೇಕೆಂದೂ ಲೋಕದ ಜನ
ರೆಲ್ಲರು ನನ್ನ ಬಗ್ಗೆ ತಿಳಿದುಕೊಳ್ಳಬೇಕೆಂದೂ ನಾನು
ನಿನ್ನನ್ನು ಇನ್ನೂ ಉಳಿಸಿದ್ದೇನೆ. 17ಆದರೂ ನೀನು ನನ್ನ
ಜನರಿಗೆ ವಿರುದ್ಧವಾಗಿರುವೆ; ಅವರಿಗೆ ಸ್ವತಂತ್ರವನ್ನು
ಕೊಡದಿರುವೆ. 18ಆದ್ದರಿಂದ ನಾಳೆ ಇದೇ ಸಮಯಕ್ಕೆ ಸರಿ
ಯಾಗಿ ಭೀಕರವಾದ ಆಲಿಕಲ್ಲಿನ ಮಳೆಯನ್ನು ಸುರಿಸು
ವೆನು. ಈಜಿಪ್ಟ್ ರಾಜ್ಯವು ಸ್ಥಾಪನೆಯಾದಂದಿನಿಂದ ಇಂಥ
ಆಲಿಕಲ್ಲಿನ ಮಳೆ ಬಿದ್ದಿಲ್ಲ. 19ಈಗ ನೀನು ನಿನ್ನ ಪಶು
ಗಳನ್ನೂ ನಿನ್ನ ಹೊಲದಲ್ಲಿರುವ ನಿನ್ನ ಪ್ರತಿಯೊಂದನ್ನೂ
ಸುರಕ್ಷಿತವಾದ ಸ್ಥಳದಲ್ಲಿ ಇರಿಸಬೇಕು. ಮನೆಯೊಳಗಿರದೆ
ಹೊಲದಲ್ಲಿರುವ ಮನುಷ್ಯರೂ ಪಶುಗಳೂ ಆಲಿಕಲ್ಲಿನ
ಮಳೆಗೆ ಸಿಕ್ಕಿಕೊಂಡು ಸಾಯುವರು’ ಎಂದು ಹೇಳಬೇಕು’’
ಅಂದನು.

20ಫರೋಹನ ಅಧಿಕಾರಿಗಳಲ್ಲಿ ಕೆಲವರು
ಯೆಹೋವನ ಸಂದೇಶಕ್ಕೆ ಕಿವಿಗೊಟ್ಟು ತಮ್ಮ ಎಲ್ಲಾ
ಪಶುಗಳನ್ನೂ ಗುಲಾಮರನ್ನೂ ಮನೆಯೊಳಗೆ ಸೇರಿಸಿ
ಕೊಂಡರು. 21ಆದರೆ ಇತರರು ಯೆಹೋವನ ಸಂದೇಶ
ವನ್ನು ನಿರ್ಲಕ್ಷ್ಯಮಾಡಿ ತಮ್ಮ ಎಲ್ಲಾ ಗುಲಾಮರನ್ನೂ ಪಶು
ಗಳನ್ನೂ ಹೊಲಗಳಲ್ಲಿಯೇ ಬಿಟ್ಟರು.

22ಯೆಹೋವನು ಮೋಶೆಗೆ, ‘‘ನಿನ್ನ ತೋಳುಗಳನ್ನು
ಆಕಾಶದ ಕಡೆಗೆ ಚಾಚು; ಆಗ ಈಜಿಪ್ಟಿನಲ್ಲೆಲ್ಲಾ ಆಲಿಕಲ್ಲಿನ
ಮಳೆ ಬೀಳತೊಡಗುವುದು. ಆಲಿಕಲ್ಲಿನ ಮಳೆಯು ಜನರ,
ಪ್ರಾಣಿಗಳ ಮತ್ತು ಈಜಿಪ್ಟಿನ ಹೊಲಗಳಲ್ಲಿರುವ ಎಲ್ಲಾ
ಸಸ್ಯಗಳ ಮೇಲೆ ಬೀಳುವುದು’’ ಎಂದು ಹೇಳಿದನು.

23ಆದ್ದರಿಂದ ಮೋಶೆ ತನ್ನ ಕೋಲನ್ನು ಆಕಾಶದ ಕಡೆಗೆ
ಚಾಚಿದನು. ಕೂಡಲೇ ಯೆಹೋವನು ಗುಡುಗು
ಮಿಂಚುಗಳಿಂದ ಕೂಡಿದ ಆಲಿಕಲ್ಲಿನ ಮಳೆಯು ಈಜಿಪ್ಟಿ
ನಲ್ಲೆಲ್ಲಾ ಸುರಿಸಿದನು. 24ಆಲಿಕಲ್ಲಿನ ಮಳೆಯು ಭೀಕರ
ವಾಗಿತ್ತು ಝುಗಝುಗಿಸುವ ಮಿಂಚು ಅದರೊಂದಿಗಿತ್ತು.
ಈಜಿಪ್ಟ್ ಒಂದು ರಾಷ್ಟ್ರವಾದಂದಿನಿಂದ ಇಂಥ ಭೀಕರ
ವಾದ ಆಲಿಕಲ್ಲಿನ ಮಳೆ ಎಂದೂ ಆಗಿರಲಿಲ್ಲ. 25ಈಜಿಪ್ಟಿನ
ಹೊಲಗಳಲ್ಲಿದ್ದ ಪ್ರತಿಯೊಂದನ್ನೂ ಬಿರುಗಾಳಿ ನಾಶ
ಮಾಡಿತು. ಆಲಿಕಲ್ಲು ಜನರನ್ನೂ ಪ್ರಾಣಿಗಳನ್ನೂ ಸಸ್ಯ
ಗಳನ್ನೂ ನಾಶಮಾಡಿತು; ಹೊಲಗಳಲ್ಲಿದ್ದ ಎಲ್ಲಾ ಮರ
ಗಳನ್ನು ಮುರಿದುಹಾಕಿತು. 26ಇಸ್ರೇಲರು ವಾಸವಾಗಿದ್ದ
ಗೋಷೆನ್ ಪ್ರದೇಶದಲ್ಲಿ ಮಾತ್ರ ಆಲಿಕಲ್ಲಿನ ಮಳೆ
ಯಾಗಲಿಲ್ಲ.

27ಫರೋಹನು ಮೋಶೆ ಆರೋನರನ್ನು ಕರೆಸಿ
ಅವರಿಗೆ, ‘‘ಈ ಸಾರಿ ನಾನು ಪಾಪ ಮಾಡಿದ್ದೇನೆ.
ಯೆಹೋವನೇ ನೀತಿವಂತನು. ನಾನೂ ನನ್ನ ಜನರೂ
ದೋಷಿಗಳಾಗಿದ್ದೇವೆ. 28ಭಯಂಕರವಾದ ಗುಡುಗೂ
ಆಲಿಕಲ್ಲಿನ ಮಳೆಯೂ ಬಹಳ ಹೆಚ್ಚಾದವು. ಇವುಗಳನ್ನು
ನಿಲ್ಲಿಸಬೇಕೆಂದು ದೇವರನ್ನು ಪ್ರಾರ್ಥಿಸಿರಿ; ನಿಮ್ಮನ್ನು ಈ
ದೇಶದಿಂದ ಕಳುಹಿಸಿಕೊಡುತ್ತೇನೆ; ತಡೆಯುವುದಿಲ್ಲ’’
ಎಂದು ಹೇಳಿದನು.

29ಮೋಶೆಯು ಫರೋಹನಿಗೆ, ‘‘ನಾನು ಪಟ್ಟಣ
ದಿಂದಾಚೆಗೆ ಹೋದಕೂಡಲೇ ಕೈಯೆತ್ತಿ ಯೆಹೋವನಲ್ಲಿ
ಪ್ರಾರ್ಥಿಸುವೆನು, ಆಗ ಗುಡುಗೂ ಆಲಿಕಲ್ಲಿನ ಮಳೆಯೂ
ನಿಂತುಹೋಗುವವು. ಭೂಲೋಕವು ಯೆಹೋವನ
ಅದೀನದಲ್ಲಿದೆಯೆಂದು ಆಗ ನೀನು ತಿಳಿದುಕೊಳ್ಳುವೆ.
30ಆದರೆ ನೀನಾಗಲೀ ನಿನ್ನ ಅಧಿಕಾರಿಗಳಾಗಲೀ ಇನ್ನೂ
ದೇವರಿಗೆ ಭಯಪಡುವುದಿಲ್ಲ ಎಂಬುದು ನನಗೆ
ಗೊತ್ತಿದೆ’’ ಎಂದು ಹೇಳಿದನು.

31ಅಗಸೆಯ ಮೊಗ್ಗೂ ಬಾರ್ಲಿಗೆ ತೆನೆಯೂ ಬಂದಿದ್ದ
ರಿಂದ ಈ ಎರಡು ಬೆಳೆಗಳು ನಾಶವಾದವು. 32ಆದರೆ
ಗೋಧಿಯೂ ಕಡಲೆಯೂ ಬೇರೆ ಧಾನ್ಯಗಳ ನಂತರ
ಆಗುವ ಬೆಳೆಗಳಾಗಿದ್ದವು. ಆದ್ದರಿಂದ ಈ ಪೈರುಗಳು ನಾಶ
ವಾಗಲಿಲ್ಲ.

33ಮೋಶೆಯು ಫರೋಹನ ಬಳಿಯಿಂದ ಹೊರಟು
ಪಟ್ಟಣದಾಚೆಗೆ ಹೋದಾಗ ಕೈಯೆತ್ತಿ ಯೆಹೋವನಲ್ಲಿ
ಪ್ರಾರ್ಥಿಸಿದನು. ಆಗ ಗುಡುಗೂ ಆಲಿಕಲ್ಲಿನ ಮಳೆಯೂ
ನಿಂತುಹೋದವು; ಮಳೆಯೂ ನಿಂತುಹೋಯಿತು.

34ಮಳೆಯೂ ಆಲಿಕಲ್ಲಿನ ಮಳೆಯೂ ಗುಡುಗೂ
ನಿಂತುಹೋದದ್ದನ್ನು ಕಂಡ ಫರೋಹನು ಮತ್ತು ಅವನ
ಅಧಿಕಾರಿಗಳು ಮತ್ತೆ ತಮ್ಮ ಹೃದಗಳನ್ನು ಕಠಿಣ ಪಡಿಸಿ
ಕೊಂಡು ಪಾಪಮಾಡಿದರು.

35ಇಸ್ರೇಲರು ಸ್ವತಂತ್ರರಾಗಿ ಹೋಗಲು ಫರೋಹನು
ಬಿಡಲಿಲ್ಲ. ಯೆಹೋವನು ಮೋಶೆಯ ಮೂಲಕ ಹೇಳಿಸಿ
ದಂತೆಯೇ ಇದಾಯಿತು.

## ಮಿಡತೆಗಳಿಂದ ಬಾಧೆ

10 ಯೆಹೋವನು ಮೋಶೆಗೆ, ‘‘ಫರೋಹನ ಬಳಿಗೆ
ಹೋಗು. ನಾನು ಅದ್ಭುತಕಾರ್ಯಗಳನ್ನು
ತೋರಿಸಲು ಅವಕಾಶವಾಗಲೆಂದು ಫರೋಹನ ಮತ್ತು
ಅವನ ಅಧಿಕಾರಿಗಳ ಹೃದಯಗಳನ್ನು ಕಠಿಣಪಡಿಸಿದ್ದೇನೆ.
2 ನಾನು ಈಜಿಪ್ಟಿನಲ್ಲಿ ಮಾಡಿದ ಸೂಚಕಕಾರ್ಯಗಳನ್ನೂ
ಇತರ ಅದ್ಭುತಕಾರ್ಯಗಳನ್ನೂ ನೀವು ನಿಮ್ಮ ಮಕ್ಕಳಿಗೆ
ಮತ್ತು ಮೊಮ್ಮಕ್ಕಳಿಗೆ ವಿವರಿಸಿ, ‘ಯೆಹೋವನು ಈಜಿಪ್ಟಿನ
ವರನ್ನು ತನಗೆ ಇಷ್ಟಬಂದಂತೆ ಶಿಕ್ಷಿಸಿದನು’ ಎಂಬುದಾಗಿ
ತಿಳಿಸಬೇಕೆಂದು ನಾವು ಫರೋಹನ ಮತ್ತು ಅವನ ಅಧಿ
ಕಾರಿಗಳ ಹೃದಯಗಳನ್ನು ಕಠಿಣಪಡಿಸಿದ್ದೇನೆ. ಇದಲ್ಲದೆ
ಈ ಮಹತ್ಕಾರ್ಯಗಳ ಮೂಲಕ ನಾನೇ ಯೆಹೋವ
ನೆಂದು ತಿಳಿದುಕೊಳ್ಳುವಿರಿ.’’

3 ಆದ್ದರಿಂದ ಮೋಶೆ ಆರೋನರು ಫರೋಹನ ಬಳಿಗೆ
ಹೋಗಿ, ‘‘ಇಬ್ರಿಯರ ದೇವರಾದ ಯೆಹೋವನು ಹೀಗ
ನ್ನುತ್ತಾನೆ, ‘ನೀನು ಎಲ್ಲಿಯವರೆಗೆ ನನಗೆ ವಿಧೇಯನಾಗು
ವುದಿಲ್ಲ? ನನ್ನನ್ನು ಆರಾಧಿಸಲು ನನ್ನ ಜನರನ್ನು ಕಳುಹಿಸಿ
ಕೊಡು! 4 ನೀನು ನನ್ನ ಜನರನ್ನು ಕಳುಹಿಸಿಕೊಡದಿದ್ದರೆ,
ನಾಳೆಯೇ ನಿನ್ನ ದೇಶದೊಳಗೆ ಮಿಡತೆಗಳನ್ನು ತರುವೆನು.
5 ಮಿಡತೆಗಳು ಬಂದು ಭೂಮಿಯನ್ನು ಮುಚ್ಚಿಕೊಳ್ಳು
ವವು; ನೆಲವೇ ಕಾಣಿಸದೆ ಹೋಗುವುದು. ಆಲಿಕಲ್ಲಿನ ಮಳೆ
ಯಿಂದ ನಾಶವಾಗದೆ ಉಳಿದಿರುವುದನ್ನು ಮಿಡತೆಗಳು
ತಿಂದುಬಿಡುತ್ತವೆ; ಹೊಲದಲ್ಲಿರುವ ಎಲ್ಲಾ ಮರಗಳ ಎಲೆ
ಗಳನ್ನು ತಿಂದುಬಿಡುತ್ತವೆ.

6 ಅವು ನಿನ್ನ ಮನೆಗಳಲ್ಲಿಯೂ ನಿನ್ನ ಅಧಿಕಾರಿಗಳ
ಮನೆಗಳಲ್ಲಿಯೂ ಈಜಿಪ್ಟಿನ ಎಲ್ಲಾ ಮನೆಗಳಲ್ಲಿಯೂ
ತುಂಬಿರುತ್ತವೆ. ನಿನ್ನ ತಂದೆಗಳೂ ತಾತಂದಿರೂ
ನೋಡಿಲ್ಲದಷ್ಟು ಮಿಡತೆಗಳಿರುತ್ತವೆ’’’ ಎಂದು ಹೇಳಿ
ದರು. ಬಳಿಕ ಫರೋಹನ ಬಳಿಯಿಂದ ಹೊರಟು
ಹೋದರು.

7 ಅಧಿಕಾರಿಗಳು ಫರೋಹನಿಗೆ, ‘‘ಈ ಜನರಿಂದ
ಇನ್ನೆಷ್ಟುಕಾಲ ನಾವು ಬಳಲಬೇಕು? ಇವರು ಹೋಗಿ
ತಮ್ಮ ದೇವರಾದ ಯೆಹೋವನನ್ನು ಆರಾಧಿಸಲಿ.
ಈಜಿಪ್ಟ್ ನಾಶವಾಗುತ್ತಿದೆ ಎಂಬುದು ನಿನಗಿನ್ನೂ ಮನವ
ರಿಕೆಯಾಗಿಲ್ಲವೇ?’’ ಅಂದರು.

8 ಆದ್ದರಿಂದ ಫರೋಹನು ಮೋಶೆ ಆರೋನರನ್ನು ತನ್ನ
ಬಳಿಗೆ ಕರೆಯಿಸಿ, ‘‘ಹೋಗಿ ನಿಮ್ಮ ದೇವರಾದ
ಯೆಹೋವನನ್ನು ಆರಾಧಿಸಿರಿ. ಆದರೆ ಹೋಗುವವರು
ಯಾರೆಂಬುದನ್ನು ನನಗೆ ತಿಳಿಸಿ’’ ಅಂದನು.

9 ಮೋಶೆಯು, ‘‘ಯೌವನಸ್ಥರು, ಮುದುಕರು,
ಎಲ್ಲರೂ ಹೋಗುತ್ತೇವೆ. ನಮ್ಮ ಗಂಡು ಹೆಣ್ಣು ಮಕ್ಕ
ಳನ್ನೂ ನಮ್ಮ ದನಕುರಿಗಳನ್ನೂ ತೆಗೆದುಕೊಂಡು
ಹೋಗುತ್ತೇವೆ. ಯಾಕಂದರೆ ಇದು ಯೆಹೋವನ
ಜಾತ್ರೆ’’ ಎಂದು ಉತ್ತರಕೊಟ್ಟನು.

10 ಫರೋಹನು ಅವರಿಗೆ, ‘‘ಯೆಹೋವನಾಣೆ, ನೀವು
ನಿಮ್ಮ ಸ್ತ್ರೀಯರನ್ನೂ ಮಕ್ಕಳನ್ನೂ ಕರೆದುಕೊಂಡು
ಹೋಗಲು ನಾನು ಅನುಮತಿ ಕೊಡುವುದೇ ಇಲ್ಲ.
11 ನೀನು ನನಗೆ ವಿರೋಧವಾಗಿ ಸಂಚುಮಾಡುತ್ತಿರು
ವುದು ಈಗ ಸ್ಪಷ್ಟವಾಯಿತು’’ ಎಂದು ಹೇಳಿದನು. ಬಳಿಕ
ಫರೋಹನು ಮೋಶೆ ಆರೋನರನ್ನು ಕಳುಹಿಸಿಬಿಟ್ಟನು.

12 ಯೆಹೋವನು ಮೋಶೆಗೆ, ‘‘ಈಜಿಪ್ಟ್ ದೇಶದ
ಮೇಲೆ ನಿನ್ನ ಕೈಯನ್ನೆತ್ತು. ಆಗ ಮಿಡತೆಗಳು ಬರುವವು!
ಮಿಡತೆಗಳು ಈಜಿಪ್ಟ್ ದೇಶದಲ್ಲೆಲ್ಲಾ ಹರಡಿಕೊಳ್ಳುವವು.
ಆಲಿಕಲ್ಲಿನ ಮಳೆಯಿಂದ ನಾಶವಾಗದೆ ಉಳಿದುಕೊಂಡ
ಪೈರುಗಳನ್ನೆಲ್ಲಾ ಮಿಡತೆಗಳು ತಿಂದುಬಿಡುವವು’’ ಎಂದು
ಹೇಳಿದನು.

13 ಅಂತೆಯೇ ಮೋಶೆ ಈಜಿಪ್ಟ್ ದೇಶದ ಮೇಲೆ ಕೈ
ಚಾಚಿದನು. ಆಗ ಯೆಹೋವನು ಪೂರ್ವದಿಂದ ಬಲ
ವಾದ ಗಾಳಿ ಬೀಸುವಂತೆ ಮಾಡಿದನು. ಗಾಳಿಯು ಹಗಲಿ
ರುಳು ಬೀಸಿತು. ಮುಂಜಾನೆಯಾದಾಗ ಆ ಗಾಳಿಯಿಂದ
ಈಜಿಪ್ಟ್ ದೇಶಕ್ಕೆ ಮಿಡತೆಗಳು ಬಂದವು. 14 ಮಿಡತೆಗಳು
ಈಜಿಪ್ಟ್ ದೇಶದೊಳಗೆ ಹಾರಿಬಂದು ನೆಲದ ಮೇಲೆ
ಇಳಿದವು. ಈಜಿಪ್ಟಿನಲ್ಲಿ ಹಿಂದೆಂದೂ ಇಷ್ಟು ಮಿಡತೆಗಳು
ಇರಲಿಲ್ಲ; ಇನ್ನು ಮುಂದೆಯೂ ಇರುವುದಿಲ್ಲ. 15 ಮಿಡತೆ
ಗಳು ನೆಲವನ್ನು ಮುಚ್ಚಿಕೊಂಡವು; ಇದರಿಂದಾಗಿ ನೆಲವು
ಕಾಣದಂತಾಯಿತು. ಆಲಿಕಲ್ಲಿನ ಮಳೆಗೆ ನಾಶವಾಗದೆ
ಉಳಿದಿದ್ದ ಎಲ್ಲಾ ಪೈರುಗಳನ್ನೂ ಮರಗಳಲ್ಲಿದ್ದ ಕಾಯಿ
ಗಳನ್ನೂ ಅವು ತಿಂದುಬಿಟ್ಟವು. ಈಜಿಪ್ಟಿನಲ್ಲೆಲ್ಲಾ ಮರಗಳ
ಲ್ಲಾಗಲೀ ಗಿಡಗಳಲ್ಲಾಗಲೀ ಹಸುರಾಗಿದ್ದ ಒಂದಾದರೂ
ಉಳಿಯಲಿಲ್ಲ.

16 ಫರೋಹನು ಕೂಡಲೇ ಮೋಶೆ ಆರೋನರನ್ನು
ಕರೆಸಿ, ‘‘ನಾನು ನಿಮ್ಮ ದೇವರಾದ ಯೆಹೋವನಿಗೂ
ನಿಮಗೂ ವಿರುದ್ಧವಾಗಿ ಪಾಪ ಮಾಡಿದ್ದೇನೆ.
17 ಇದೊಂದು ಸಲ ನನ್ನ ಪಾಪಗಳನ್ನು ಕ್ಷಮಿಸಿ ಈ ‘ವಿಪ
ತ್ತನ್ನು’ ನನ್ನಿಂದ ತೊಲಗಿಸಬೇಕೆಂದು ಯೆಹೋವನಿಗೆ
ಪ್ರಾರ್ಥಿಸಿರಿ’’ ಎಂದು ಹೇಳಿದನು.

18 ಮೋಶೆಯು ಫರೋಹನ ಬಳಿಯಿಂದ ಹೋಗಿ
ಯೆಹೋವನಿಗೆ ಪ್ರಾರ್ಥಿಸಿದನು. 19 ಆದ್ದರಿಂದ
ಯೆಹೋವನು ಗಾಳಿಯ ದಿಕ್ಕನ್ನು ಬದಲಾಯಿಸಿ, ಪಶ್ಚಿಮ
ದಿಂದ ಬಲವಾದ ಗಾಳಿ ಬೀಸುವಂತೆ ಮಾಡಿದನು; ಅದು
ಮಿಡತೆಗಳನ್ನು ಕೆಂಪು ಸಮುದ್ರಕ್ಕೆ ಹಾರಿಸಿತು. ಈಜಿಪ್ಟಿನಲ್ಲಿ
ಒಂದು ಮಿಡತೆಯೂ ಉಳಿಯಲಿಲ್ಲ. 20 ಆದರೆ
ಫರೋಹನು ಮತ್ತೆ ಹೃದಯವನ್ನು ಕಠಿಣಪಡಿಸಿಕೊಂಡು
ಇಸ್ರೇಲರನ್ನು ಕಳುಹಿಸಿಕೊಡಲಿಲ್ಲ.

## ಕಾರ್ಗತ್ತಲೆ

21ಬಳಿಕ ಯೆಹೋವನು ಮೋಶೆಗೆ, ‘‘ನಿನ್ನ ಕೈಯನ್ನು
ಆಕಾಶದ ಕಡೆಗೆ ಚಾಚು. ಆಗ ಕಾರ್ಗತ್ತಲೆಯು ಈಜಿಪ್ಟನ್ನು
ಆವರಿಸುವುದು. ಆ ಕಾರ್ಗತ್ತಲೆಯಿಂದ ಜನರು ತಡವರಿ
ಸುತ್ತಾ ನಡೆಯುವರು’’ ಎಂದು ಹೇಳಿದನು.
22ಮೋಶೆ ತನ್ನ ಕೈಯನ್ನು ಆಕಾಶದ ಕಡೆಗೆ ಚಾಚಿದಾಗ
ಕಾರ್ಗತ್ತಲು ಈಜಿಪ್ಟನ್ನು ಆವರಿಸಿತು. ಕಾರ್ಗತ್ತಲು ಈಜಿಪ್ಟಿ
ನಲ್ಲಿ ಮೂರು ದಿನಗಳವರೆಗೆ ಇತ್ತು. 23ಈ ಮೂರು ದಿನ
ಗಳಲ್ಲಿ ಯಾರೂ ಒಬ್ಬರನ್ನೊಬ್ಬರು ನೋಡಲಾಗಲಿಲ್ಲ.
ಯಾವ ಸ್ಥಳಕ್ಕೂ ಹೋಗಲಿಲ್ಲ. ಆದರೆ ಇಸ್ರೇಲರು
ವಾಸಿಸುತ್ತಿದ್ದ ಸ್ಥಳಗಳಲ್ಲಿ ಬೆಳಕಿತ್ತು.
24ಫರೋಹನು ಮತ್ತೆ ಮೋಶೆಯನ್ನು ಕರೆಸಿ,
‘‘ಹೋಗಿ, ಯೆಹೋವನನ್ನು ಆರಾಧಿಸಿರಿ! ನೀವು ನಿಮ್ಮ
ಮಕ್ಕಳನ್ನು ಕರೆದುಕೊಂಡು ಹೋಗಬಹುದು. ಆದರೆ
ನೀವು ನಿಮ್ಮ ಕುರಿಗಳನ್ನು ದನಕರುಗಳನ್ನು ಇಲ್ಲಿಯೇ
ಬಿಟ್ಟು ಹೋಗಬೇಕು’’ ಎಂದು ಕೇಳಿದನು.
25ಮೋಶೆಯು ‘‘ನಾವು ನಮ್ಮ ಕುರಿಗಳನ್ನೂ ದನಕರು
ಗಳನ್ನೂ ಕಾಣಿಕೆಗಳಿಗಾಗಿ ಮತ್ತು ಯಜ್ಞಗಳಿಗಾಗಿ ತೆಗೆದು
ಕೊಂಡು ಹೋಗಬೇಕು; ಮಾತ್ರವಲ್ಲದೆ 26ನಮ್ಮ ಪ್ರಾಣಿ
ಗಳನ್ನೆಲ್ಲಾ ತೆಗೆದುಕೊಂಡು ಹೋಗುವೆವು. ಒಂದನ್ನಾ
ದರೂ ಬಿಟ್ಟುಹೋಗುವುದಿಲ್ಲ; ಯಾವ ಪಶುಗಳನ್ನು
ಅರ್ಪಿಸಬೇಕೆಂಬುದು ಅಲ್ಲಿಗೆ ಹೋದಾಗಲೇ ನಮಗೆ ತಿಳಿ
ಯುವುದು. ಆದ್ದರಿಂದ, ನಾವು ಇವುಗಳನ್ನೆಲ್ಲಾ ನಮ್ಮ
ಜೊತೆಯಲ್ಲಿ ತೆಗೆದುಕೊಂಡು ಹೋಗಬೇಕು’’ ಎಂದು
ಹೇಳಿದನು.
27ಯೆಹೋವನು ಫರೋಹನ ಹೃದಯವನ್ನು ಮತ್ತೆ
ಕಠಿಣಗೊಳಿಸಿದನು. ಆದ್ದರಿಂದ ಫರೋಹನು ಅವರನ್ನು
ಕಳುಹಿಸಿಕೊಡಲಿಲ್ಲ. 28ಫರೋಹನು ಮೋಶೆಗೆ,
‘‘ಇಲ್ಲಿಂದ ತೊಲಗಿಹೋಗು! ನೀನು ನನ್ನ ಸನ್ನಿಧಿಗೆ ಇನ್ನು
ಮೇಲೆ ಬರಕೂಡದು. ನೀನು ಮತ್ತೆ ಬಂದರೆ ನಿನಗೆ
ಮರಣದಂಡನೆ ವಿಧಿಸುವೆನು’’ ಎಂದನು.
29ಅದಕ್ಕೆ ಮೋಶೆಯು ಫರೋಹನಿಗೆ, ‘‘ಸರಿ,
ಇನ್ನುಮೇಲೆ ನಾನು ನಿನ್ನ ಸನ್ನಿಧಿಗೆ ಬರುವುದೇ ಇಲ್ಲ’’
ಎಂದು ಹೇಳಿದನು.

## ಚೊಚ್ಚಲು ಮಕ್ಕಳ ಮರಣ

11 ಬಳಿಕ ಯೆಹೋವನು ಮೋಶೆಗೆ, ‘‘ನಾನು
ಫರೋಹನಿಗೂ ಈಜಿಪ್ಟಿಗೂ ಮತ್ತೊಂದು ವಿಪ
ತ್ತನ್ನು ಬರಮಾಡುತ್ತೇನೆ. ಆಗ ಅವನು ನಿಮ್ಮನ್ನು ಈಜಿಪ್ಟಿ
ನಿಂದ ಕಳುಹಿಸುವನು; ನಿಮ್ಮನ್ನು ಬಲವಂತದಿಂದ ಕಳು
ಹಿಸಿಬಿಡುವನು. 2ನೀನು ಇಸ್ರೇಲರಿಗೆ ಈ ಸಂದೇಶವನ್ನು
ತಿಳಿಸು: ‘ಸ್ತ್ರೀಯರೂ ಪುರುಷರೂ ತಮ್ಮ ನೆರೆಯವರಿಂದ
ಬೆಳ್ಳಿ ಬಂಗಾರಗಳ ವಸ್ತುಗಳನ್ನು ಕೇಳಿಕೊಳ್ಳಬೇಕು.
3ಈಜಿಪ್ಟಿನವರು ನಿಮಗೆ ದಯೆ ತೋರುವಂತೆ
ಯೆಹೋವನು ಅವರನ್ನು ಪ್ರೇರೇಪಿಸುವನು. ಈಜಿಪ್ಟಿನ
ಜನರು ಮತ್ತು ಫರೋಹನ ಅಧಿಕಾರಿಗಳು ಮೋಶೆ
ಯನ್ನು ಮಹಾಪುರುಷನೆಂದು ತಿಳಿದುಕೊಂಡಿದ್ದಾರೆ’’
ಎಂದು ಹೇಳಿದನು.
4ಮೋಶೆಯು ಜನರಿಗೆ, ‘‘ಯೆಹೋವನು, ಇಂತೆನ್ನು
ತ್ತಾನೆ: ‘ಇಂದು ಮಧ್ಯರಾತ್ರಿ ನಾನು ಈಜಿಪ್ಟಿನ ಮೂಲಕ
ಹಾದುಹೋಗುವೆನು. 5ಈಜಿಪ್ಟಿನ ಚೊಚ್ಚಲು ಮಕ್ಕಳೆ
ಲ್ಲರೂ ಅಂದರೆ ಫರೋಹನ ಚೊಚ್ಚಲು ಮಗನಿಂದಿಡಿದು
ಧಾನ್ಯವನ್ನು ಬೀಸುವ ಸೇವಕಿಯ ಚೊಚ್ಚಲು ಮಗನ
ವರೆಗೂ ಇರುವ ಚೊಚ್ಚಲು ಮಕ್ಕಳೆಲ್ಲರೂ ಸಾಯುವರು.
ಇದಲ್ಲದೆ ಚೊಚ್ಚಲು ಪಶುಗಳೂ ಸಾಯುತ್ತವೆ. 6ಈಜಿಪ್ಟಿ
ನಲ್ಲೆಲ್ಲಾ ದೊಡ್ಡ ಗೋಳಾಟ ಉಂಟಾಗುವುದು, ಅಂಥ
ಗೋಳಾಟ ಈವರೆಗೂ ಆಗಿಲ್ಲ; ಮುಂದೆಯೂ ಆಗುವು
ದಿಲ್ಲ. 7ಆದರೆ ಇಸ್ರೇಲರಲ್ಲಿ ಯಾರಿಗೂ ಕೇಡಾಗುವು
ದಿಲ್ಲ. ಒಂದು ನಾಯಿಯೂ ಅವರಿಗೆ ಬೊಗಳುವುದಿಲ್ಲ.
ಇಸ್ರೇಲಿನ ಜನರಿಗಾಗಲೀ ಪಶುಗಳಿಗಾಗಲೀ ಕೇಡಾಗು
ವುದಿಲ್ಲ. ಇಸ್ರೇಲರಿಗೂ ಮತ್ತು ಈಜಿಪ್ಟಿನವರಿಗೂ ನಾನು
ವ್ಯತ್ಯಾಸ ಮಾಡಿದ್ದೇನೆಂದು ಆಗ ನೀವು ತಿಳಿದು ಕೊಳ್ಳು
ವಿರಿ. 8ಆಗ ನಿಮ್ಮ ಈ ಗುಲಾಮರೆಲ್ಲರೂ (ಈಜಿಪ್ಟಿನ ಅಧಿ
ಕಾರಿಗಳು) ನನ್ನ ಬಳಿಗೆ ಬಂದು ನನಗೆ ಅಡ್ಡಬಿದ್ದು ನನ್ನನ್ನು
ಆರಾಧಿಸುವರು. ಅವರು, ‘‘ಹೊರಟುಹೋಗಿ, ನಿಮ್ಮ
ಜನರೆಲ್ಲರನ್ನು ನಿಮ್ಮೊಂದಿಗೆ ಕರೆದುಕೊಂಡು ಹೋಗಿರಿ’’
ಎಂದು ಹೇಳುವರು. ಆಗ ನಾನು ಫರೋಹನ ಬಳಿಯಿಂದ
ಬಿಟ್ಟುಹೋಗುವೆನು’’’ ಅಂದನು.
9ಬಳಿಕ ಯೆಹೋವನು ಮೋಶೆಗೆ, ‘‘ಫರೋಹನು ನಿನ್ನ
ಮಾತಿಗೆ ಕಿವಿಗೊಡುವುದಿಲ್ಲ. ಯಾಕೆಂದರೆ ನಾನು ನನ್ನ
ಮಹಾಶಕ್ತಿಯನ್ನು ಈಜಿಪ್ಟಿನಲ್ಲಿ ತೋರಿಸಬೇಕಾಗಿದೆ’’
ಅಂದನು. 10ಯೆಹೋವನು ಫರೋಹನ ಹೃದಯವನ್ನು
ಕಠಿಣಗೊಳಿಸಿದ್ದರಿಂದ ಫರೋಹನು ಇಸ್ರೇಲರನ್ನು ಕಳು
ಹಿಸಿ ಕೊಡಲಿಲ್ಲ; ಆದ್ದರಿಂದ ಮೋಶೆ ಆರೋನರು ಈ
ಅದ್ಭುತ ಕಾರ್ಯಗಳನ್ನೆಲ್ಲಾ ಮಾಡಿದರು.

## ಪಸ್ಕ ಹಬ್ಬ

12 ಮೋಶೆ ಆರೋನರು ಇನ್ನೂ ಈಜಿಪ್ಟಿನಲ್ಲಿದ್ದಾಗ
ಯೆಹೋವನು ಅವರೊಡನೆ ಮಾತಾಡಿ, 2‘‘ಈ
ತಿಂಗಳು* ನಿಮಗೆ ವರ್ಷದ ಮೊದಲನೆ ತಿಂಗಳಾಗಿರು
ವುದು. 3ಈ ಆಜ್ಞೆಯು ಇಡೀ ಇಸ್ರೇಲರ ಸಮೂಹಕ್ಕೆ
ಅನ್ವಯಿಸುತ್ತಿದೆ. ಈ ತಿಂಗಳ ಹತ್ತನೆಯ ದಿನದಲ್ಲಿ

---

**ತಿಂಗಳು** ಮಾರ್ಚ್ ತಿಂಗಳ ಮಧ್ಯ ಭಾಗದಿಂದ ಏಪ್ರಿಲ್ ತಿಂಗಳ ಮಧ್ಯ ಭಾಗದವರೆಗೆ.

ಪ್ರತಿಯೊಬ್ಬನು ತನ್ನ ಮನೆಯಲ್ಲಿರುವ ಜನರಿಗಾಗಿ ಒಂದು
ಕುರಿಮರಿಯನ್ನು ಅಥವಾ ಒಂದು ಆಡುಮರಿಯನ್ನು
ಕೊಯ್ಯಬೇಕು. 4ಅದನ್ನು ಸಂಪೂರ್ಣವಾಗಿ ತಿನ್ನಲು
ಅವನ ಮನೆಯಲ್ಲಿ ಸಾಕಷ್ಟು ಜನರಿಲ್ಲದಿದ್ದರೆ ಅವನು ತನ್ನ
ನೆರೆಯವರನ್ನು ಆಮಂತ್ರಿಸಿ ಅವರೊಂದಿಗೆ ಅದರ ಮಾಂಸ
ವನ್ನು ಹಂಚಿಕೊಳ್ಳಬೇಕು. ಪ್ರತಿಯೊಬ್ಬನಿಗೂ ತಿನ್ನಲು
ಸಾಕಷ್ಟು ಮಾಂಸವಿರಬೇಕು. 5ಅದು ಒಂದು ವರ್ಷದ
ಗಂಡುಕುರಿಯಾಗಿರಬೇಕು ಅಥವಾ ಆಡಾಗಿರಬೇಕು.
ಅಲ್ಲದೆ ಕಳಂಕರಹಿತವಾಗಿರಬೇಕು. 6ಈ ತಿಂಗಳ ಹದಿ
ನಾಲ್ಕನೆಯ ದಿನದವರೆಗೆ ನೀವು ಆ ಪಶುವನ್ನು
ಸಾಕಬೇಕು. ಅಂದು ಸಂಜೆ ಇಸ್ರೇಲರೆಲ್ಲರೂ ಆ ಪಶು
ಗಳನ್ನು ಕೊಯ್ಯಬೇಕು. 7ಈ ಪಶುಗಳ ರಕ್ತವನ್ನು ತೆಗೆ
ದಿಟ್ಟು ಜನರು ಭೋಜನಮಾಡುವ ಮನೆಗಳ ಬಾಗಿಲಿನ
ಎರಡು ನಿಲುವು ಕಂಬಗಳಿಗೂ ಮೇಲಿನ ಪಟ್ಟಿಗಳಿಗೂ
ಆ ರಕ್ತವನ್ನು ಹಚ್ಚಬೇಕು.

8‘‘ಅಂದು ರಾತ್ರಿ ಆ ಪಶುವಿನ ಮಾಂಸವನ್ನು ಸುಟ್ಟು
ಸಂಪೂರ್ಣವಾಗಿ ತಿನ್ನಬೇಕು. ಅದರೊಡನೆ ಕಹಿಯಾದ
ಪಲ್ಯಗಳನ್ನೂ ಹುಳಿಯಿಲ್ಲದ ರೊಟ್ಟಿಯನ್ನೂ ತಿನ್ನಬೇಕು.
9ನೀವು ಆ ಪಶುವಿನ ಮಾಂಸವನ್ನು ಹಸಿಯಾಗಲೀ ನೀರಿ
ನಲ್ಲಿ ಬೇಯಿಸಿಯಾಗಲೀ ತಿನ್ನಬಾರದು; ಅದರ ಮಾಂಸ
ವನ್ನು ಬೆಂಕಿಯ ಮೇಲಿಟ್ಟು ಬೇಯಿಸಬೇಕು. ಅದರ ತಲೆ
ಕಾಲುಗಳನ್ನೂ ಒಳಗಿನ ಭಾಗಗಳನ್ನೂ ಬೆಂಕಿಯ ಮೇಲೆ
ಬೇಯಿಸಬೇಕು. 10ಅದರ ಮಾಂಸವನ್ನೆಲ್ಲಾ ಆ ರಾತ್ರಿಯ
ಲ್ಲಿಯೇ ತಿನ್ನಬೇಕು. ಬೆಳಗಾಗುವವರೆಗೆ ಮಾಂಸವೇನಾ
ದರೂ ಉಳಿದರೆ ಅದನ್ನು ಬೆಂಕಿಯಿಂದ ಸುಟ್ಟುಬಿಡ
ಬೇಕು.

11‘‘ನೀವು ಭೋಜನ ಮಾಡುವಾಗ ಪ್ರಯಾಣ ಮಾಡು
ತ್ತಿರುವಂತೆ ಬಟ್ಟೆ ಧರಿಸಿಕೊಂಡಿರಬೇಕು; ಕೆರಗಳನ್ನು
ಹಾಕಿಕೊಂಡು ನಿಮ್ಮ ಊರುಗೋಲನ್ನು ಕೈಯಲ್ಲಿ
ಹಿಡಿದಿರಬೇಕು. ನೀವು ಅವಸವಸರವಾಗಿ ತಿನ್ನಬೇಕು.
ಯಾಕಂದರ ಇದು ಯೆಹೋವನ ಪಸ್ಕಹಬ್ಬ.*

12‘‘ಆ ರಾತ್ರಿ ನಾನು ಈಜಿಪ್ಟಿನ ಮೂಲಕ ಹಾದು
ಹೋಗಿ ಈಜಿಪ್ಟಿನ ಚೊಚ್ಚಲು ಪಶುಗಳನ್ನೂ ಚೊಚ್ಚಲು
ಗಂಡುಮಕ್ಕಳನ್ನೂ ಕೊಲ್ಲುವೆನು; ಈಜಿಪ್ಟಿನ ಎಲ್ಲಾ
ದೇವರುಗಳಿಗೆ ತೀರ್ಪುಮಾಡುವೆನು. ನಾನೇ ಯೆಹೋವ
ನೆಂದು ತೋರಿಸಿಕೊಡುವೆನು. 13ಆದರೆ ನಿಮ್ಮ ಮನೆಗಳಿಗೆ
ಹಚ್ಚಿರುವ ರಕ್ತವು ಒಂದು ವಿಶೇಷ ಸೂಚನೆಯಾಗಿದೆ.
ನಾನು ಆ ರಕ್ತವನ್ನು ನೋಡಿದಾಗ ನಿಮ್ಮ ಮನೆಯನ್ನು
ದಾಟಿಹೋಗುವೆನು.* ಈಜಿಪ್ಟಿನ ಜನರಿಗೆ ಕೇಡು
ಗಳಾಗುವಂತೆ ಮಾಡುವೆನು. ಆದರೆ ಆ ವ್ಯಾದಿಗಳು ನಿಮಗೆ
ಹಾನಿ ಮಾಡುವುದಿಲ್ಲ.

14‘‘ಆದ್ದರಿಂದ ನೀವು ಆ ರಾತ್ರಿಯನ್ನು ಯಾವಾಗಲೂ
ಜ್ಞಾಪಿಸಿಕೊಳ್ಳುವಿರಿ. ಅದು ನಿಮಗೆ ವಿಶೇಷವಾದ ಹಬ್ಬವಾ
ಗಿರುವುದು. ನಿಮ್ಮ ಸಂತತಿಯವರು ಈ ಹಬ್ಬದಿಂದ
ಯೆಹೋವನನ್ನು ಎಂದೆಂದಿಗೂ ಸನ್ಮಾನಿಸುವರು. 15ಈ
ಹಬ್ಬದಲ್ಲಿ ನೀವು ಹುಳಿಯಿಲ್ಲದ ರೊಟ್ಟಿಯನ್ನು ಏಳು
ದಿವಸ ತಿನ್ನುವಿರಿ. ಹಬ್ಬದ ಪ್ರಥಮ ದಿನದಲ್ಲಿ ನೀವು ನಿಮ್ಮ
ಮನೆಯಿಂದ ಎಲ್ಲಾ ಹುಳಿಯನ್ನು ತೆಗೆದು ಹಾಕುವಿರಿ. ಈ
ಹಬ್ಬದ ಏಳು ದಿನಗಳಲ್ಲಿ ಯಾವುದೇ ಹುಳಿಯನ್ನು ತಿನ್ನ
ಬಾರದು. ಯಾವನಾದರೂ ಹುಳಿಯನ್ನು ತಿಂದರೆ, ನೀವು
ಅವನನ್ನು ಇಸ್ರೇಲಿನಿಂದ ಬಹಿಷ್ಕರಿಸಬೇಕು. 16ಈ ಹಬ್ಬದ
ಪ್ರಥಮ ಮತ್ತು ಕೊನೆಯ ದಿನಗಳಲ್ಲಿ ಪವಿತ್ರ ಸಭೆಯಾಗಿ
ಕೂಡಿಬರಬೇಕು. ಈ ಹಬ್ಬದ ದಿನಗಳಲ್ಲಿ ನೀವು ಯಾವ
ಕೆಲಸವನ್ನೂ ಮಾಡಬಾರದು ಆದರೆ ನಿಮ್ಮ ಭೋಜನ
ಕ್ಕಾಗಿ ಆಹಾರ ಸಿದ್ಧಪಡಿಸಬಹುದು. 17ನೀವು ಹುಳಿ
ಯಿಲ್ಲದ ರೊಟ್ಟಿಯ ಹಬ್ಬವನ್ನು ಆಚರಿಸಲೇಬೇಕು.
ಯಾಕಂದರ ಆ ದಿನದಲ್ಲಿಯೇ ನಾನು ನಿಮ್ಮ ಎಲ್ಲಾ ಜನರ
ಗುಂಪುಗಳನ್ನು ಈಜಿಪ್ಟಿನಿಂದ ಬಿಡಿಸಿ ಕರೆದುಕೊಂಡು
ಹೋದೆನು. ಆದ್ದರಿಂದ ನಿಮ್ಮ ಸಂತತಿಯವರೆಲ್ಲರೂ ಆ
ದಿನವನ್ನು ಜ್ಞಾಪಕಮಾಡಿಕೊಳ್ಳಬೇಕು. ಇದು ಶಾಶ್ವತ
ವಾದ ಕಟ್ಟಳೆಯಾಗಿದೆ. 18ಆದ್ದರಿಂದ ಪ್ರಥಮ ತಿಂಗಳಿನ
ಹದಿನಾಲ್ಕನೆಯ ದಿನದ ಸಾಯಂಕಾಲ ನೀವು ಹುಳಿ
ಯಿಲ್ಲದ ರೊಟ್ಟಿಯನ್ನು ತಿನ್ನಲು ಆರಂಭಿಸಿ ಅದೇ ತಿಂಗಳ
ಇಪ್ಪತ್ತೊಂದನೇ ದಿನದ ಸಾಯಂಕಾಲದವರೆಗೂ ತಿನ್ನು
ವಿರಿ. 19ಏಳು ದಿನಗಳವರೆಗೆ ನಿಮ್ಮ ಮನೆಗಳಲ್ಲಿ ಯಾವ
ಹುಳಿಯೂ ಇರಬಾರದು. ಯಾವ ಇಸ್ರೇಲಿಯಾದರೂ
ಯಾವ ವಿದೇಶಿಯನಾದರೂ ಈ ಹಬ್ಬದಲ್ಲಿ ಹುಳಿಯನ್ನು
ತಿಂದರೆ, ಅವನನ್ನು ಇಸ್ರೇಲರ ಸಮುದಾಯದಿಂದ ಬಹಿಷ್ಕ
ರಿಸಬೇಕು. 20ಈ ಹಬ್ಬದಲ್ಲಿ ನೀವು ಹುಳಿಯನ್ನು ತಿನ್ನ
ಬಾರದು. ನೀವು ಎಲ್ಲೇ ವಾಸವಾಗಿದ್ದರೂ ಹುಳಿಯಿಲ್ಲದ
ರೊಟ್ಟಿಯನ್ನೇ ತಿನ್ನಬೇಕು’’ ಎಂದು ಹೇಳಿದನು.

21ಆದ್ದರಿಂದ ಮೋಶೆಯು ಹಿರಿಯರ ಸಭೆ ಸೇರಿಸಿ,
‘‘ನಿಮ್ಮ ಕುಟುಂಬಗಳಿಗೆ ಬೇಕಾದ ಪಶುಗಳನ್ನು ತೆಗೆದು
ಕೊಂಡು ಪಸ್ಕಕ್ಕಾಗಿ ಅವುಗಳನ್ನು ಕೊಯ್ಯಿರಿ.
22ಹಿಸ್ಸೋಪ್* ಗಿಡದ ಬರಲನ್ನು ತೆಗೆದುಕೊಂಡು ರಕ್ತ
ತುಂಬಿರುವ ಪಾತ್ರೆಯಲ್ಲಿ ಅದ್ದಿರಿ. ರಕ್ತವನ್ನು ಬಾಗಿಲಿನ
ನಿಲುವು ಕಂಬಗಳಿಗೆ ಮತ್ತು ಮೇಲಿನ ಪಟ್ಟಿಗಳಿಗೆ ಹಚ್ಚಿರಿ.
ಮುಂಜಾನೆಯಾಗುವವರೆಗೆ ಯಾರೂ ತಮ್ಮ ಮನೆಯನ್ನು

---

**ಪಸ್ಕಹಬ್ಬ** ಇಬ್ರಿಯ ಪದದ ಅರ್ಥವೇನೆಂದರೆ, ‘‘ಬಿಟ್ಟುಹೋಗು, ಮುಂದೆ ಹಾದುಹೋಗು’’ ಅಥವಾ ‘‘ಸಂರಕ್ಷಿಸು.’’

**ದಾಟಿಹೋಗುವೆನು** ಅಥವಾ ‘‘ಸಂರಕ್ಷಿಸುವೆನು.’’

**ಹಿಸ್ಸೋಪ್** ಅಡಿ ಉದ್ದ ಕಾಂಡಗಳಿರುವ ಗಿಡ. ಇದರ ಎಲೆ ಮತ್ತು ಕೊಂಬೆಗಳು ಕೂದಲಿನಂತಿರುತ್ತವೆ. ಹೀಗಾಗಿ ಅದು ಬಣ್ಣ ಬಳಿಯಲು ಉಪಯೋಗವಾಗುತ್ತಿತ್ತು.

ಬಿಟ್ಟು ಹೊರಗೆ ಹೋಗಬಾರದು. 23ಆ ಸಮಯದಲ್ಲಿ
ಚೊಚ್ಚಲಾದವುಗಳನ್ನು ಸಂಹರಿಸಲು ಯೆಹೋವನು
ಈಜಿಪ್ಟಿನ ಮೂಲಕ ಹಾದುಹೋಗುವನು. ಬಾಗಿಲಿನ
ನಿಲುವು ಕಂಬಗಳಿಗೆ ಮತ್ತು ಮೇಲಿನ ಪಟ್ಟಿಗಳಿಗೆ ಹಚ್ಚಿದ
ರಕ್ತವನ್ನು ಯೆಹೋವನು ನೋಡಿ ಆ ಮನೆಯನ್ನು
ಸಂರಕ್ಷಿಸುವನು.* ಸಂಹಾರಕನು ನಿಮ್ಮ ಮನೆಯೊಳಗೆ
ಬಂದು ಸಂಹರಿಸಲು ಯೆಹೋವನು ಬಿಡುವುದಿಲ್ಲ.
24ನೀವು ಈ ಆಜ್ಞೆಯನ್ನು ಜ್ಞಾಪಕದಲ್ಲಿಡಬೇಕು. ಇದು
ನಿಮಗೂ ಮತ್ತು ನಿಮ್ಮ ಸಂತತಿಯವರಿಗೂ ಶಾಶ್ವತವಾದ
ನಿಯಮವಾಗಿದೆ. 25ಯೆಹೋನು ನಿಮಗೆ ಕೊಡಲಿರುವ
ದೇಶಕ್ಕೆ ನೀವು ಹೋದಾಗಲೂ ಈ ಹಬ್ಬವನ್ನು ಆಚರಿಸ
ಬೇಕು. 26‘ಈ ಹಬ್ಬವನ್ನು ಮಾಡುವುದೇಕೆ’ ಎಂದು ನಿಮ್ಮ
ಮಕ್ಕಳು ನಿಮ್ಮನ್ನು ಕೇಳುವಾಗ, 27‘ಇದು ಯೆಹೋವ
ನನ್ನು ಸನ್ಮಾನಿಸಲು ಮಾಡುವ ಪಸ್ಕಹಬ್ಬವಾಗಿದೆ.
ಯಾಕಂದರೆ ನಾವು ಈಜಿಪ್ಟಿನಲ್ಲಿದ್ದಾಗ ಯೆಹೋವನು
ಇಸ್ರೇಲರ ಮನೆಗಳನ್ನು ಬಿಟ್ಟು ದಾಟಿಹೋದನು; ಈಜಿಪ್ಟಿ
ನವರನ್ನು ಸಂಹರಿಸಿದನು; ಆದರೆ ಆತನು ನಮ್ಮ ಮನೆಗಳ
ಲ್ಲಿದ್ದವರನ್ನು ರಕ್ಷಿಸಿದನು’ ಎಂದು ಹೇಳಬೇಕು. ಆಗ
ಇಸ್ರೇಲರು (ಮೋಶೆಯ ಮಾತನ್ನು ಕೇಳುತ್ತಿದ್ದವರು)
ಅಡ್ಡಬಿದ್ದು ಯೆಹೋವನನ್ನು ಆರಾಧಿಸಿದರು.’’
28ಯೆಹೋವನು ಮೋಶೆ ಮತ್ತು ಆರೋನರಿಗೆ
ಆಜ್ಞಾಪಿಸಿದ್ದಂತೆಯೇ ಇಸ್ರೇಲರು ಮಾಡಿದರು.
29ಮಧ್ಯರಾತ್ರಿಯಲ್ಲಿ ಯೆಹೋವನು ಈಜಿಪ್ಟಿನಲ್ಲಿದ್ದ
ಚೊಚ್ಚಲು ಗಂಡುಮಕ್ಕಳನ್ನೆಲ್ಲಾ ಸಂಹರಿಸಿದನು.
ಫರೋಹನ* ಚೊಚ್ಚಲು ಮಗನಿಂದಿಡಿದು ಸೆರೆಮನೆಯ
ಲ್ಲಿದ್ದ ಕೈದಿಯ ಚೊಚ್ಚಲು ಮಗನವರೆಗೆ ಇರುವ ಎಲ್ಲಾ
ಚೊಚ್ಚಲು ಮಕ್ಕಳನ್ನು ಆತನು ಸಂಹರಿಸಿದನು. ಚೊಚ್ಚಲು
ಪಶುಗಳೂ ಸಂಹರಿಸಲ್ಪಟ್ಟವು. 30ಆ ರಾತ್ರಿಯಲ್ಲಿ
ಫರೋಹನೂ ಅವನ ಅಧಿಕಾರಿಗಳೂ ಈಜಿಪ್ಟಿನ ಜನರೆ
ಲ್ಲರೂ ಎದ್ದರು. ಈಜಿಪ್ಟಿನಲ್ಲಿ ಮಹಾ ಗೋಳಾಟ ಉಂಟಾ
ಯಿತು. ಯಾಕಂದರೆ ಸಾವಿಲ್ಲದ ಮನೆಯೇ ಇರಲಿಲ್ಲ.

## ಇಸ್ರೇಲರಿಗೆ ಈಜಿಪ್ಟಿನಿಂದ ಬಿಡುಗಡೆ

31ಆದ್ದರಿಂದ ಆ ರಾತ್ರಿ, ಫರೋಹನು ಮೋಶೆ
ಆರೋನರನ್ನು ಕರೆಸಿ, ‘‘ನನ್ನ ಜನರನ್ನು ಬಿಟ್ಟುಹೋಗಿರಿ.
ನೀವು ಕೇಳಿಕೊಂಡಂತೆ ನೀವು ಮತ್ತು ನಿಮ್ಮ ಜನರು
ಹೊರಟು ಹೋಗಿ ಯೆಹೋವನನ್ನು ಆರಾಧಿಸಿರಿ.
32ನೀವು ಕೇಳಿಕೊಂಡಂತೆ ನಿಮ್ಮ ಕುರಿಗಳನ್ನೂ ದನಕರು
ಗಳನ್ನೂ ನಿಮ್ಮೊಂದಿಗೆ ತೆಗೆದುಕೊಂಡು ಹೋಗಿರಿ!
ನನ್ನನ್ನು ಆಶೀರ್ವದಿಸಿರಿ!’’ ಎಂದು ಹೇಳಿದನು.
33ಈಜಿಪ್ಟಿನ ಜನರು ಸಹ ತಮ್ಮನ್ನು ಬೇಗನೆ ಬಿಟ್ಟುಹೋಗ
ಬೇಕೆಂದು ಇಸ್ರೇಲರನ್ನು ಬೇಡಿಕೊಂಡು, ‘‘ನೀವು ಬಿಟ್ಟು
ಹೋಗದಿದ್ದರೆ, ನಾವೆಲ್ಲಾ ಸಾಯುವೆವು’’ ಎಂದು
ಹೇಳಿದರು.

34ತಮ್ಮ ರೊಟ್ಟಿಗೆ ಹುಳಿಹಾಕಲು ಇಸ್ರೇಲರಿಗೆ ಸಮಯ
ವಿರಲಿಲ್ಲ. ಅವರು ಹಿಟ್ಟಿನ ಮುದ್ದೆಯನ್ನು ಬಟ್ಟೆಯಲ್ಲಿ
ಸುತ್ತಿ ಹೆಗಲಿನ ಮೇಲೆ ಹೊತ್ತುಕೊಂಡು ಹೋದರು.
35ಅಲ್ಲದೆ ಮೋಶೆಯು ಹೇಳಿದಂತೆಯೇ ಇಸ್ರೇಲರು
ತಮ್ಮ ನೆರೆಮನೆಯವರ ಬಳಿಗೆ ಹೋಗಿ ಬಟ್ಟೆಗಳನ್ನೂ
ಬೆಳ್ಳಿ, ಬಂಗಾರಗಳ ವಸ್ತುಗಳನ್ನೂ ಕೇಳಿಕೊಂಡರು.
36ಈಜಿಪ್ಟಿನವರು ಇಸ್ರೇಲರಿಗೆ ದಯೆತೋರಿಸುವಂತೆ
ಯೆಹೋವನು ಪ್ರೇರೇಪಿಸಿದ್ದರಿಂದ ಈಜಿಪ್ಟಿನವರು ತಮ್ಮ
ಸ್ವತ್ತುಗಳನ್ನು ಇಸ್ರೇಲರಿಗೆ ಕೊಟ್ಟುಬಿಟ್ಟರು.

37ಇಸ್ರೇಲರು ರಮ್ಸೇಸ್‌ನಿಂದ ಸುಕ್ಕೋತಿಗೆ ಪ್ರಯಾಣ
ಮಾಡಿದರು. ಅವರಲ್ಲಿ ಸುಮಾರು ಆರು ಲಕ್ಷ ಮಂದಿ*
ಗಂಡಸರಿದ್ದರು. (ಈ ಸಂಖ್ಯೆಯಲ್ಲಿ ಮಕ್ಕಳು ಸೇರಿಲ್ಲ.)
38ಲೆಕ್ಕವಿಲ್ಲದಷ್ಟು ಕುರಿಗಳೂ ದನಕರುಗಳೂ ಇವ
ರೊಂದಿಗಿದ್ದವು. ಇಸ್ರೇಲರಲ್ಲದ ಬೇರೆ ಜನರು ಸಹ
ಇಸ್ರೇಲರೊಂದಿಗೆ ಈಜಿಪ್ಟಿನಿಂದ ಹೊರಟರು.
39ರೊಟ್ಟಿಗೆ ಹುಳಿಹಾಕುವಷ್ಟು ಸಮಯವೂ ಜನರಿಗೆ
ಇರಲಿಲ್ಲ; ಅವರು ತಮ್ಮ ಪ್ರಯಾಣಕ್ಕಾಗಿ ಆಹಾರವನ್ನು
ತಯಾರಿಸುವುದಕ್ಕೂ ಆಗಲಿಲ್ಲ. ಆದ್ದರಿಂದ ಅವರು
ಹುಳಿಯಿಲ್ಲದ ರೊಟ್ಟಿ ಮಾಡಿ ತಮ್ಮೊಡನೆ ತೆಗೆದುಕೊಂಡು
ಹೋದರು.

40ಇಸ್ರೇಲರು ಈಜಿಪ್ಟಿನಲ್ಲಿ ನಾನೂರಮೂವತ್ತು ವರ್ಷ
ವಾಸಿಸಿದರು. 41ನಾನೂರಮೂವತ್ತು ವರ್ಷಗಳಾದ
ನಂತರ, ಅದೇ ದಿನದಂದು ಯೆಹೋವನ ಸೈನ್ಯಗಳೆಲ್ಲಾ*
ಈಜಿಪ್ಟನ್ನು* ಬಿಟ್ಟು ಹೊರಟವು. 42ಆದ್ದರಿಂದ
ಯೆಹೋವನು ಅವರನ್ನು ಸಂರಕ್ಷಿಸಿ ಈಜಿಪ್ಟಿನಿಂದ ಹೊರ
ತಂದದ್ದನ್ನು ಜ್ಞಾಪಕ ಮಾಡುವ ಆ ರಾತ್ರಿ ಬಹು ವಿಶೇಷ
ವಾದ ರಾತ್ರಿಯಾಗಿದೆ. ಇಸ್ರೇಲರೆಲ್ಲರೂ ಆ ರಾತ್ರಿಯನ್ನು
ಯಾವಾಗಲೂ ಜ್ಞಾಪಿಸಿಕೊಳ್ಳುವರು.

43ಯೆಹೋವನು ಮೋಶೆ ಆರೋನರಿಗೆ, ‘‘ಪಸ್ಕಹಬ್ಬದ

---

**ಸಂರಕ್ಷಿಸುವನು** ಅಥವಾ ‘‘ದಾಟಿ ಹೋಗುವನು.’’

**ಫರೋಹನ** ತಂದೆಯ ಆಳ್ವಿಕೆಯ ನಂತರ ಚೊಚ್ಚಲು ಮಗನೇ ರಾಜ್ಯಾ ಬಾರ ಮಾಡುತ್ತಿದ್ದನು.

**ಆರು ಲಕ್ಷ ಮಂದಿ** ಅಥವಾ ಆರುನೂರು ಕುಟುಂಬ ಗುಂಪುಗಳು. ಇಬ್ರಿಯ ಪದ ‘ಸಾವಿರ’ ಎಂಬುದು. ಕುಟುಂಬ ಗುಂಪುಗಳು ಎಂಬ ಅರ್ಥವನ್ನು ಕೊಡುವ ಇಬ್ರಿಯ ಪದಗಳಿಂತಿದೆ.

**ಯೆಹೋವನ ಸೈನ್ಯಗಳು** ಇಸ್ರೇಲ್ ಜನರು.

**ಈಜಿಪ್ಟ್** ಪುರಾತನ ಗ್ರೀಕ್ ಮತ್ತು ಸಮಾರ್ಯದ ಅನುವಾದಗಳಲ್ಲಿ ‘‘ಈಜಿಪ್ಟ್ ಮತ್ತು ಕಾನಾನ್’’ ಎಂದಿದೆ. ಅವರು ಅಬ್ರಹಾಮನ ಕಾಲ ದಿಂದ ವರ್ಷಗಳನ್ನು ಎಣಿಸಿದ್ದಾರೆಂದೂ ಅವರು ಯೋಸೇಫನ ಕಾಲ ದಿಂದ ಎಣಿಸಿಲ್ಲವೆಂದು ಇದು ಅರ್ಥ ಕೊಡುತ್ತಿದೆ ಆದಿಕಾಂಡ15:12-16 ಮತ್ತು ಗಲಾತ್ಯ 3:17ರಲ್ಲಿ ನೋಡಿ.

ನಿಯಮಗಳು ಇಂತಿವೆ: ಯಾವ ಪರದೇಶಿಯೂ ಪಸ್ಕ
ಹಬ್ಬದ ಊಟವನ್ನು ಮಾಡಬಾರದು. 44ಆದರೆ ಸುನ್ನತಿ
ಮಾಡಿಸಿಕೊಂಡಿರುವ ಗುಲಾಮನು ಪಸ್ಕಹಬ್ಬದ ಊಟ
ವನ್ನು ಮಾಡಬಹುದು. 45ಆದರೆ ನಿಮ್ಮ ದೇಶದಲ್ಲಿ ಕೇವಲ
ವಾಸವಾಗಿರುವವರಾಗಲೀ ಕೂಲಿಯಾಳಾಗಲೀ ಪಸ್ಕ
ಹಬ್ಬದ ಊಟ ಮಾಡಬಾರದು.

46‘‘ಪಸ್ಕಹಬ್ಬದ ಊಟವನ್ನು ಮನೆಯೊಳಗೆ ತಿನ್ನ
ಬೇಕು. ಪಸ್ಕದ ಮಾಂಸವನ್ನು ಮನೆಯಿಂದ ಹೊರಗೆ
ತೆಗೆದುಕೊಂಡು ಹೋಗಕೂಡದು. ಕುರಿಮರಿಯ
ಎಲುಬುಗಳಲ್ಲಿ ಯಾವದನ್ನು ಮುರಿಯಬಾರದು.
47ಇಸ್ರೇಲರ ಇಡೀ ಸಮೂಹವು ಈ ಹಬ್ಬವನ್ನು ಆಚರಿಸ
ಬೇಕು. 48ನಿಮ್ಮ ಮಧ್ಯದಲ್ಲಿ ವಾಸವಾಗಿರುವ ಪರದೇಶದ
ವನು ಯೆಹೋವನ ಪಸ್ಕ ಭೋಜನದಲ್ಲಿ ಪಾಲುಗಾರ
ನಾಗಬೇಕೆಂದು ಬಯಸಿದರೆ ಅವನು ಸುನ್ನತಿ ಮಾಡಿಸಿ
ಕೊಳ್ಳಬೇಕು. ಆಗ ಅವನು ಇಸ್ರೇಲಿನವನಾಗುವುದರಿಂದ
ಭೋಜನದಲ್ಲಿ ಪಾಲುಗಾರನಾಗಬಹುದು. ಆದರೆ
ಸುನ್ನತಿಯಾಗಿಲ್ಲದವನು ಪಸ್ಕದ ಊಟಮಾಡಕೂಡದು.
49ಪ್ರತಿಯೊಬ್ಬರಿಗೂ ಇದೇ ನಿಯಮ ಅನ್ವಯಿಸುತ್ತದೆ.
ಸ್ವದೇಶದವನಿಗೂ ನಿಮ್ಮಲ್ಲಿ ವಾಸವಾಗಿರುವ ಪರದೇಶದ
ವನಿಗೂ ಒಂದೇ ನಿಯಮವಿರಬೇಕು’’ ಅಂದನು.

50ಯೆಹೋವನು ಮೋಶೆ ಆರೋನರಿಗೆ ಆಜ್ಞಾಪಿಸಿ
ದಂತೆಯೇ ಇಸ್ರೇಲರೆಲ್ಲರೂ ಮಾಡಿದರು. 51ಆದ್ದರಿಂದ
ಅದೇ ದಿನದಲ್ಲಿ ಯೆಹೋವನು ಇಸ್ರೇಲರನ್ನು ಈಜಿಪ್ಟ್
ದೇಶದಿಂದ ಜನರನ್ನು ಗುಂಪು ಗುಂಪುಗಳಾಗಿ* ಹೊರ
ತಂದನು.

13 ಬಳಿಕ ಯೆಹೋವನು ಮೋಶೆಗೆ, 2‘‘ಇಸ್ರೇಲ
ರಲ್ಲಿ ಹುಟ್ಟಿದ ಚೊಚ್ಚಲು ಗಂಡುಮಕ್ಕಳೆಲ್ಲಾ
ನನಗೆ ಮೀಸಲಾಗಿರಬೇಕು; ಪ್ರತಿಯೊಬ್ಬ ಚೊಚ್ಚಲು
ಮಗನು ನನ್ನವನೇ. ಪ್ರತಿಯೊಂದು ಚೊಚ್ಚಲು ಪಶುವು
ನನ್ನದೇ’’ ಎಂದು ಹೇಳಿದನು.

3ಮೋಶೆಯು ಜನರಿಗೆ,‘‘ನೀವು ಈಜಿಪ್ಟಿನ ಗುಲಾಮ
ತನದಿಂದ ಬಿಡುಗಡೆಯಾದ ಈ ದಿನವನ್ನು ಜ್ಞಾಪಕ ಮಾಡಿ
ಕೊಳ್ಳಿರಿ. ಆದರೆ ಈ ದಿನದಲ್ಲಿ ಯೆಹೋವನು ತನ್ನ ಮಹಾ
ಶಕ್ತಿಯಿಂದ ನಿಮ್ಮನ್ನು ಸ್ವತಂತ್ರರನ್ನಾಗಿ ಮಾಡಿದನು.
ನೀವು ಹುಳಿಯಿರುವ ರೊಟ್ಟಿಯನ್ನು ತಿನ್ನಬಾರದು.
4ಅಬೀಬ್* ತಿಂಗಳಿನ ಈ ದಿನದಲ್ಲಿ ನೀವು ಈಜಿಪ್ಟನ್ನು
ಬಿಟ್ಟು ಹೊರಟಿರಿ. 5ಆಗ ಯೆಹೋವನು ಒಂದು ವಿಶೇಷ
ವಾಗ್ದಾನವನ್ನು ನಿಮ್ಮ ಪೂರ್ವಿಕರಿಗೆ ಮಾಡಿದನು. ಕಾನಾ
ನ್ಯರು, ಹಿತ್ತಿಯರು, ಅಮೋರಿಯರು, ಹಿವ್ವಿಯರು,
ಮತ್ತು ಯೆಬೂಸಿಯರು ವಾಸಿಸುವ ಸಮೃದ್ಧಿಕರವಾದ
ದೇಶವನ್ನು ನಿಮಗೆ ಕೊಡುವುದಾಗಿ ಯೆಹೋವನು
ವಾಗ್ದಾನ ಮಾಡಿದನು. ಆತನು ನಿಮಗೆ ಆ ದೇಶವನ್ನು
ಕೊಟ್ಟಾಗ ಪ್ರತಿವರ್ಷದ ಮೊದಲನೆಯ ತಿಂಗಳ ಈ ದಿನ
ವನ್ನು ಆರಾಧನೆಯ ವಿಶೇಷ ದಿನವನ್ನಾಗಿ ಇಟ್ಟುಕೊಳ್ಳ
ಬೇಕು.

6‘‘ಏಳು ದಿನಗಳವರೆಗೆ ನೀವು ಕೇವಲ ಹುಳಿಯಿಲ್ಲದ
ರೊಟ್ಟಿಯನ್ನೇ ತಿನ್ನಬೇಕು. ಏಳನೆಯ ದಿನದಲ್ಲಿ
ಯೆಹೋವನ ಘನತೆಗಾಗಿ ಒಂದು ದೊಡ್ಡ ಹಬ್ಬ ಮಾಡ
ಬೇಕು. 7ಆದ್ದರಿಂದ ಹುಳಿಯಿರುವ ರೊಟ್ಟಿಯನ್ನು ಏಳು
ದಿನಗಳವರೆಗೆ ತಿನ್ನಬಾರದು. ನಿಮ್ಮ ದೇಶದಲ್ಲಿ ಹುಳಿಯಿ
ರುವ ರೊಟ್ಟಿ ಇರಲೇಕೂಡದು. 8ಈ ದಿನದಲ್ಲಿ ನೀವು
ನಿಮ್ಮ ಮಕ್ಕಳಿಗೆ, ‘‘ಯೆಹೋವನು ನಮ್ಮನ್ನು ಈಜಿಪ್ಟಿ
ನಿಂದ ಬಿಡಿಸಿಕೊಂಡು ಬಂದದರಿಂದ ನಾವು ಈ ಹಬ್ಬ
ವನ್ನು ಮಾಡುತ್ತಿದ್ದೇವೆ’ ಎಂದು ಹೇಳಬೇಕು.

9‘‘ಈ ಹಬ್ಬವು ನಿಮ್ಮ ಕೈಗಳಲ್ಲಿ ಜ್ಞಾಪಕಪಟ್ಟಿಯಂತಿದ್ದು
ಯೆಹೋವನು ತನ್ನ ಮಹಾಶಕ್ತಿಯಿಂದ ನಿಮ್ಮನ್ನು ಈಜಿಪ್ಟಿ
ನಿಂದ ಬಿಡಿಸಿದ್ದನ್ನು ಮತ್ತು ನಿಮಗೆ ಆತನು ನೀಡಿದ ಉಪ
ದೇಶಗಳನ್ನು ನೆನಪಿಗೆ ತರುತ್ತದೆ. 10ಆದ್ದರಿಂದ ಪ್ರತಿವರ್ಷ
ನಿಯಮಿತವಾದ ಕಾಲದಲ್ಲಿ ನೀವು ಈ ಹಬ್ಬವನ್ನು
ಆಚರಿಸಬೇಕು.

11‘‘ಯೆಹೋವನು ನಿಮಗೆ ಕೊಡುವುದಾಗಿ ವಾಗ್ದಾನ
ಮಾಡಿದ ದೇಶಕ್ಕೆ ನಿಮ್ಮನ್ನು ನಡಿಸುವನು. ಈಗ ಅಲ್ಲಿ
ಕಾನಾನ್ಯರು ವಾಸವಾಗಿದ್ದಾರೆ. ಆದರೆ ದೇವರು ಆ ದೇಶ
ವನ್ನು ನಿಮಗೆ ಕೊಡುವುದಾಗಿ ನಿಮ್ಮ ಪೂರ್ವಿಕರಿಗೆ
ವಾಗ್ದಾನ ಮಾಡಿದನು. ದೇವರು ಆ ದೇಶವನ್ನು ನಿಮಗೆ
ಕೊಟ್ಟನಂತರ 12ನೀವು ನಿಮ್ಮ ಚೊಚ್ಚಲು ಗಂಡು
ಮಕ್ಕಳನ್ನು ಆತನಿಗಾಗಿ ಮೀಸಲಿಡಬೇಕು. 13ಚೊಚ್ಚಲು
ಕತ್ತೆಮರಿಯನ್ನು ನೀವು ಯೆಹೋವನಿಂದ ಬಿಡಿಸಿಕೊಳ್ಳ
ಬೇಕೆಂದಿದ್ದರೆ ಅದಕ್ಕೆ ಬದಲಾಗಿ ಒಂದು ಕುರಿಮರಿ
ಯನ್ನು ಕೊಡಬೇಕು. ಕತ್ತೆಮರಿಯನ್ನು ಬಿಡಿಸಿಕೊಳ್ಳಲು
ಇಷ್ಟಪಡದಿದ್ದರೆ, ಅದರ ಕುತ್ತಿಗೆಯನ್ನು ಮುರಿದು ಕೊಲ್ಲ
ಬೇಕು. ಆದರೆ ಚೊಚ್ಚಲು ಗಂಡು ಮಕ್ಕಳನ್ನೆಲ್ಲಾ
ಯೆಹೋವನಿಂದ ಬಿಡಿಸಿಕೊಳ್ಳಲೇಬೇಕು.

14‘‘ಮುಂದಿನಕಾಲದಲ್ಲಿ ನಿಮ್ಮ ಮಕ್ಕಳು, ನೀವು
ಹೀಗೇಕೆ ಮಾಡುತ್ತೀರಿ’ ಎಂದು ಕೇಳುವಾಗ ನೀವು,
‘ಯೆಹೋವನು ನಮ್ಮನ್ನು ಈಜಿಪ್ಟಿನಿಂದ ತನ್ನ ಮಹಾ
ಶಕ್ತಿಯಿಂದ ರಕ್ಷಿಸಿದನು. ನಾವು ಅಲ್ಲಿ ಗುಲಾಮರಾಗಿ
ದ್ದೆವು, ಆದರೆ ಯೆಹೋವನು ನಮ್ಮನ್ನು ಇಲ್ಲಿಗೆ ಕರೆದು
ಕೊಂಡು ಬಂದನು. 15ಈಜಿಪ್ಟಿನಲ್ಲಿ ಫರೋಹನು ತನ್ನ
ಹೃದಯವನ್ನು ಕಠಿಣಪಡಿಸಿಕೊಂಡು ನಮ್ಮನ್ನು ಕಳುಹಿಸಿ

**ಗುಂಪು** ಅಥವಾ ‘‘ವಿಭಾಗಗಳು.’’ ಇದು ಸೈನ್ಯದ ಒಂದು ಪದ. ಜನರು ಯೆಹೋವನ ಸೈನ್ಯದಂತೆ ಸುಸಜ್ಜಿತರಾಗಿದ್ದರೆಂದು ಇದು ಸೂಚಿಸುತ್ತದೆ.

**ಅಬೀಬ್** ಅಥವಾ ‘‘ಚೈತ್ರಮಾಸ’’ ಯೆಹೂದ್ಯರ ವರ್ಷದಲ್ಲಿ ಇದು ಪ್ರಥಮ ತಿಂಗಳು.

ಕೊಡಲಿಲ್ಲ. ಆಗ ಯೆಹೋವನು ಆ ದೇಶದ ಚೊಚ್ಚಲು
ಗಂಡುಮಕ್ಕಳನ್ನೆಲ್ಲಾ ಸಂಹರಿಸಿದನು. (ಯೆಹೋವನು
ಚೊಚ್ಚಲು ಪಶುಗಳನ್ನು ಮತ್ತು ಚೊಚ್ಚಲು ಗಂಡು
ಮಕ್ಕಳನ್ನು ಕೊಂದನು.) ಆದ್ದರಿಂದ ನಾನು ಚೊಚ್ಚಲಾದ
ಪ್ರತಿಯೊಂದು ಗಂಡುಪಶುವನ್ನು ಯೆಹೋವನಿಗೆ ಯಜ್ಞ
ವಾಗಿ ಅರ್ಪಿಸುತ್ತೇನೆ. ಈ ಕಾರಣದಿಂದಲೇ, ನನ್ನ ಪ್ರತಿ
ಯೊಂದು ಗಂಡುಮಗುವನ್ನು ಯೆಹೋವನಿಂದ ಮತ್ತೆ
ಖರೀದಿ ಮಾಡುತ್ತೇನೆ' ಎಂದು ಹೇಳುವಿರಿ. 16ಇದು ನಿಮ್ಮ
ಕೈಗೆ ದಾರಕಟ್ಟಿದಂತಿರುತ್ತದೆ; ನಿಮ್ಮ ಕಣ್ಣುಗಳ ಮುಂದೆ
ಒಂದು ಚಿಹ್ನೆಯಂತೆ ಇರುತ್ತದೆ.* ಯೆಹೋವನು ತನ್ನ
ಮಹಾಶಕ್ತಿಯಿಂದ ನಮ್ಮನ್ನು ಈಜಿಪ್ಟಿನಿಂದ ಹೊರಗೆ
ಕರೆದುಕೊಂಡು ಬಂದನೆಂಬುದನ್ನು ಜ್ಞಾಪಿಸಿಕೊಳ್ಳಲು
ಇದು ಸಹಾಯಮಾಡುತ್ತದೆ.''

### ಈಜಿಪ್ಟಿನಿಂದ ಪ್ರಯಾಣ

17ಇಸ್ರೇಲರು ಈಜಿಪ್ಟನ್ನು ಬಿಟ್ಟುಹೋಗುವಂತೆ
ಫರೋಹನು ಅನುಮತಿ ನೀಡಿದನು. ಇಸ್ರೇಲರು ಫಿಲಿಷ್ಟಿ
ಯರ ದೇಶದ ಮೂಲಕ ಹಾದುಹೋಗುವ ರಸ್ತೆಯಲ್ಲಿ
ಹೋಗಲು ಯೆಹೋವನು ಅನುಮತಿ ನೀಡಲಿಲ್ಲ. ಸಮು
ದ್ರದ ಮೂಲಕ ಹಾದುಹೋಗುವ ಆ ರಸ್ತೆ ಬಹಳ ಹತ್ತಿರ
ವಾಗಿತ್ತು. ಆದರೆ ಯೆಹೋವನು, ''ಇಸ್ರೇಲರು ಆ ದಾರಿ
ಯಲ್ಲಿ ಹೋದರೆ, ಯುದ್ಧ ಮಾಡಬೇಕಾಗುವುದು. ಆಗ
ಅವರು ತಮ್ಮ ಮನಸ್ಸುಗಳನ್ನು ಬದಲಾಯಿಸಿ ಈಜಿಪ್ಟಿಗೆ
ಹಿಂತಿರುಗಬಹುದು'' ಅಂದುಕೊಂಡನು. 18ಆದ್ದರಿಂದ
ಯೆಹೋವನು ಅವರನ್ನು ಕೆಂಪು ಸಮುದ್ರದ ಅರಣ್ಯದ
ಮೂಲಕ ನಡೆಸಿದನು. ಇಸ್ರೇಲರು ಈಜಿಪ್ಟನ್ನು ಬಿಟ್ಟಾಗ
ಯುದ್ಧವಸ್ತ್ರಗಳನ್ನು ಧರಿಸಿಕೊಂಡಿದ್ದರು.

### ಯೋಸೇಫನ ಎಲುಬುಗಳನ್ನು ತೆಗೆದುಕೊಂಡರು

19ಮೋಶೆಯು ತನ್ನೊಡನೆ ಯೋಸೇಫನ ಎಲುಬು
ಗಳನ್ನು ತೆಗೆದುಕೊಂಡು ಹೋದನು. (ಯೋಸೇಫನು
ಸಾಯುವ ಮೊದಲು, ತನಗಾಗಿ ಈ ಕಾರ್ಯವನ್ನು
ಮಾಡುವಂತೆ ಇಸ್ರೇಲನ ಪುತ್ರರಿಂದ ಪ್ರಮಾಣ ಮಾಡಿ
ಸಿದನು. ಯೋಸೇಫನು ಅವರಿಗೆ, ''ಯೆಹೋವನು
ನಿಮ್ಮನ್ನು ರಕ್ಷಿಸುವಾಗ, ಈಜಿಪ್ಟಿನಿಂದ ನನ್ನ ಎಲುಬು
ಗಳನ್ನು ತೆಗೆದುಕೊಂಡು ಹೋಗಲು ಮರೆಯಬೇಡಿ''
ಎಂದು ಹೇಳಿದ್ದನು.)

### ಯೆಹೋವನು ತನ್ನ ಜನರನ್ನು ಮುನ್ನಡೆಸಿದನು

20ಇಸ್ರೇಲರು ಸುಕ್ಕೋತನ್ನು ಬಿಟ್ಟು ಏತಾಮಿನಲ್ಲಿ
ಪಾಳೆಯ ಹಾಕಿದರು. ಏತಾಮು ಮರುಭೂಮಿಗೆ ಹತ್ತಿರ
ವಾಗಿತ್ತು. 21ಯೆಹೋವನು ದಾರಿಯನ್ನು ತೋರಿಸಿದನು.
ಹಗಲಿನಲ್ಲಿ ಜನರನ್ನು ನಡಿಸಲು ಯೆಹೋವನು ಎತ್ತರ
ವಾದ ಮೇಘಸ್ತಂಭವನ್ನು ಉಪಯೋಗಿಸಿದನು; ರಾತ್ರಿ
ವೇಳೆಯಲ್ಲಿ ದಾರಿಯನ್ನು ತೋರಿಸಲು ಯೆಹೋವನು
ಎತ್ತರವಾದ ಅಗ್ನಿಸ್ತಂಭವನ್ನು ಉಪಯೋಗಿಸಿದನು. ಈ
ಬೆಂಕಿಯು ಅವರಿಗೆ ಬೆಳಕು ಕೊಟ್ಟಿದ್ದರಿಂದ ಅವರು ರಾತ್ರಿ
ಯಲ್ಲಿ ಪ್ರಯಾಣ ಮಾಡಲು ಸಾಧ್ಯವಾಯಿತು. 22ಹಗಲಿ
ನಲ್ಲಿ ಎತ್ತರವಾದ ಮೇಘಸ್ತಂಭವೂ ರಾತ್ರಿವೇಳೆಯಲ್ಲಿ
ಅಗ್ನಿಸ್ತಂಭವೂ ಯಾವಾಗಲೂ ಅವರ ಮುಂಭಾಗದಲ್ಲಿ
ಅವರೊಂದಿಗಿದ್ದವು.

14 ಬಳಿಕ ಯೆಹೋವನು ಮೋಶೆಗೆ, 2''ಪೀಹಹೀ
ರೋತಿನ ಪೂರ್ವಕಡೆಯಲ್ಲಿ ಪ್ರಯಾಣ ಮಾಡಿ
ಬಾಳ್ಜೆಫೋನಿಗೆ ಸಮೀಪದಲ್ಲಿರುವ ಮಿಗ್ದೋಲ್ ಮತ್ತು
ಕೆಂಪು ಸಮುದ್ರದ ನಡುವೆ ಇಳಿದುಕೊಳ್ಳಬೇಕೆಂದು
ಇಸ್ರೇಲರಿಗೆ ಆಜ್ಞಾಪಿಸು. 3ಇಸ್ರೇಲರು ಅರಣ್ಯದಲ್ಲಿ ದಾರಿ
ತಪ್ಪಿದರು; ಅವರಿಗೆ ಹೋಗಲು ಯಾವ ಸ್ಥಳವೂ ಇರುವು
ದಿಲ್ಲ ಎಂದು ಫರೋಹನು ಭಾವಿಸುವನು. 4ನಾನು
ಫರೋಹನ ಹೃದಯವನ್ನು ಕಠಿಣಪಡಿಸುವುದರಿಂದ
ಅವನು ನಿಮ್ಮನ್ನು ಬೆನ್ನಟ್ಟುವನು. ಆದರೆ ನಾನು ಫರೋಹ
ನನ್ನು ಮತ್ತು ಅವನ ಸೈನ್ಯವನ್ನು ಸೋಲಿಸುವೆನು. ಇದು
ನನಗೆ ಗೌರವವನ್ನು ತರುವುದು. ಆಗ ನಾನೇ ಯೆಹೋವ
ನೆಂದು ಈಜಿಪ್ಟಿನ ಜನರು ತಿಳಿದುಕೊಳ್ಳುವರು'' ಎಂದು
ಹೇಳಿದನು. ಇಸ್ರೇಲರು ದೇವರಿಗೆ ವಿಧೇಯರಾಗಿ ಆತನು
ಹೇಳಿದ್ದನ್ನು ಮಾಡಿದರು.

### ಫರೋಹನು ಇಸ್ರೇಲರನ್ನು ಬೆನ್ನಟ್ಟಿದ್ದು

5ಇಸ್ರೇಲರು ತಪ್ಪಿಸಿಕೊಂಡರೆಂಬ ವರದಿಯನ್ನು ಕೇಳಿ
ದಾಗ, ಫರೋಹನ ಮತ್ತು ಅವನ ಅಧಿಕಾರಿಗಳ ಮನಸ್ಸು
ಗಳು ಬದಲಾದವು. ಫರೋಹನು, ''ಇಸ್ರೇಲರನ್ನು ನಾವು
ಯಾಕೆ ಹೋಗಲು ಬಿಟ್ಟೆವು? ಅಯ್ಯೋ, ನಾವೀಗ ನಮ್ಮ
ಗುಲಾಮರನ್ನು ಕಳೆದುಕೊಂಡೆವಲ್ಲಾ!'' ಎಂದು
ಹೇಳಿದನು.

6ಆದ್ದರಿಂದ ಫರೋಹನು ತನ್ನ ರಥವನ್ನು ಸಿದ್ಧಮಾಡಿ
ಕೊಂಡು ತನ್ನೊಡನೆ ತನ್ನ ಜನರನ್ನು ಕರೆದುಕೊಂಡನು.
7ಫರೋಹನು ತನ್ನ ಆರುನೂರು ರಥಗಳನ್ನೂ ಅವುಗಳ
ಚಾಲಕರನ್ನೂ ಮತ್ತು ಅವುಗಳೊಡನೆ ಈಜಿಪ್ಟಿನ ಇತರ
ರಥಗಳನ್ನೂ ತೆಗೆದುಕೊಂಡನು. ಪ್ರತಿಯೊಂದು ರಥದಲ್ಲಿ
ಒಬ್ಬ ಧಳಪತಿ ಇದ್ದನು. 8ಇಸ್ರೇಲರು ಕ್ರಮಬದ್ಧವಾಗಿ
ಹೆಜ್ಜೆಹಾಕುತ್ತಾ ಧೈರ್ಯದಿಂದ ಹೋಗುತ್ತಿದ್ದರು. ಆದರೆ
ಈಜಿಪ್ಟಿನ ಅರಸನಾದ ಫರೋಹನ ಹೃದಯವನ್ನು

---

**ಇದು … ಇರುತ್ತದೆ** ಅಕ್ಷರಶಃ ''ನಿಮ್ಮ ಕೈಗಳ ಮೇಲೆ ಚಿಹ್ನೆ ಮತ್ತು ನಿಮ್ಮ ಕಣ್ಣುಗಳ ನಡುವೆ ಜ್ಞಾಪಕಪಟ್ಟಿ.'' ಯೆಹೂದ್ಯನೊಬ್ಬನು ದೇವರ ಧರ್ಮಶಾಸ್ತ್ರವನ್ನು ಜ್ಞಾಪಕಮಾಡಿಕೊಳ್ಳುವುದಕ್ಕಾಗಿ ವಿಮೋಚನೆಯ ಬಗ್ಗೆ ತಿಳಿಸುವ ಈ ವಚನಗಳನ್ನು ಚಿಕ್ಕ ಪೆಟ್ಟಿಗೆಗಳಲ್ಲಿಟ್ಟು ಅವುಗಳನ್ನು ಪ್ರಾರ್ಥನೆಯೊಡನೆ ಚರ್ಮದ ಪಟ್ಟಿಗಳಿಂದ ಕಟ್ಟಿ ತನ್ನ ಕೈಗೂ ತಲೆಗೂ ಕಟ್ಟಿಕೊಳ್ಳುತ್ತಿದ್ದದ್ದನ್ನು ಇದು ಸೂಚಿಸುತ್ತದೆ.

ಯೆಹೋವನು ಕಠಿಣಗೊಳಿಸಿದ್ದರಿಂದ ಅವನು ಇಸ್ರೇಲ
ರನ್ನು ಬೆನ್ನಟ್ಟಿದನು.
9ಈಜಿಪ್ಟಿನ ಸೈನ್ಯದಲ್ಲಿ ಅನೇಕ ರಾಹುತರು ಇದ್ದರು;
ರಥಗಳೂ ಇದ್ದವು. ಅವರು ಇಸ್ರೇಲರನ್ನು ಬೆನ್ನಟ್ಟಿದರು.
ಇಸ್ರೇಲರು ಪೀಹಹೀರೋತಿನ ಹತ್ತಿರವಿರುವ ಬಾಳ್ಚೆ
ಫೋನಿನ ಎದುರಾಗಿ ಸಮುದ್ರತೀರದಲ್ಲಿ ಇಳಿದುಕೊಳ್ಳು
ವಾಗಲೇ ಈಜಿಪ್ಟಿನ ಸೈನ್ಯದವರು ಅವರ ಹತ್ತಿರಕ್ಕೆ
ಬಂದರು.

10ಫರೋಹನೂ ಅವನ ಸೈನ್ಯವೂ ತಮ್ಮ ಕಡೆಗೆ ಬರುತ್ತಿ
ರುವುದನ್ನು ಇಸ್ರೇಲರು ಕಂಡು ಬಹು ಭಯಪಟ್ಟರು.
ಅವರು ಸಹಾಯಕ್ಕಾಗಿ ಯೆಹೋವನಿಗೆ ಮೊರೆಯಿಟ್ಟರು.
11ಅವರು ಮೋಶೆಗೆ, ‘‘ನೀನು ಯಾಕೆ ನಮ್ಮನ್ನು ಈಜಿಪ್ಟಿ
ನಿಂದ ಹೊರಗೆ ಕರೆದುಕೊಂಡು ಬಂದೆ? ನಮ್ಮನ್ನು
ಅರಣ್ಯದಲ್ಲಿ ಸಾಯಿಸುವುದಕ್ಕೆ ನೀನು ನಮ್ಮನ್ನು ಕರೆದು
ಕೊಂಡು ಬಂದೆಯಾ? ನಾವು ಈಜಿಪ್ಟಿನಲ್ಲಿಯೇ ಸಮಾ
ಧಾನದಿಂದ ಸಾಯಬಹುದಾಗಿತ್ತಲ್ಲವೆ? ಈಜಿಪ್ಟಿನಲ್ಲಿ
ಸಾಕಷ್ಟು ಸಮಾಧಿಗಳಿದ್ದವು. 12ನಾವು ನಿನಗೆ ಈಜಿಪ್ಟಿ
ನಲ್ಲೇ, ‘ದಯಮಾಡಿ ನಮ್ಮ ಗೊಡವೆಗೆ ಬರಬೇಡ. ನಾವು
ಇಲ್ಲಿದ್ದುಕೊಂಡು ಈಜಿಪ್ಟಿನವರ ಸೇವೆ ಮಾಡಲು ಬಿಡು’
ಎಂದು ಹೇಳಿದ್ದೆವು. ನಾವು ಇಲ್ಲಿಗೆ ಬಂದು ಅರಣ್ಯದಲ್ಲಿ
ಸಾಯುವುದಕ್ಕಿಂತ, ಅಲ್ಲೇ ಗುಲಾಮರಾಗಿ ಇದ್ದಿದ್ದರೆ
ಒಳ್ಳೆಯದಾಗಿರುತ್ತಿತ್ತು’’ ಎಂದು ಹೇಳಿದರು.
13ಆದರೆ ಮೋಶೆ, ‘‘ಭಯಪಡಬೇಡಿರಿ, ಓಡಿ ಹೋಗ
ಬೇಡಿರಿ! ಇಲ್ಲೇ ಇದ್ದು ಯೆಹೋವನು ಈ ದಿನ ನಿಮ್ಮನ್ನು
ರಕ್ಷಿಸುವುದನ್ನು ನೋಡಿರಿ. ಈ ದಿನದ ನಂತರ ನೀವು
ಇನ್ನೆಂದಿಗೂ ಈ ಈಜಿಪ್ಟಿನವರನ್ನು ನೋಡುವುದಿಲ್ಲ.
14ಯೆಹೋವನು ನಿಮಗೋಸ್ಕರ ಯುದ್ಧ ಮಾಡುವನು.
ಆದ್ದರಿಂದ ನೀವು ಸುಮ್ಮನೆ ಇರಿ’’ ಎಂದು ಹೇಳಿದನು.
15ಆಗ ಯೆಹೋವನು ಮೋಶೆಗೆ, ‘‘ನೀನು ನನಗೆ
ಮೊರೆಯಿಡುತ್ತಿರುವುದೇಕೆ? ಇಸ್ರೇಲರಿಗೆ ಮುಂದೆ
ಹೋಗಲು ಆಜ್ಞಾಪಿಸು. 16ನಿನ್ನ ಕೈಯಲ್ಲಿರುವ
ಊರುಗೋಲನ್ನು ಕೆಂಪು ಸಮುದ್ರದ ಮೇಲೆ ಚಾಚು.
ಆಗ ಸಮುದ್ರವು ಇಬ್ಭಾಗವಾಗುವುದು. ಜನರು ಒಣ
ನೆಲದ ಮೇಲೆ ಸಮುದ್ರವನ್ನು ದಾಟಬಹುದು. 17ಈಜಿಪ್ಟಿ
ನವರು ನಿಮ್ಮನ್ನು ಬೆನ್ನಟ್ಟುವಂತೆ ನಾನು ಅವರ ಹೃದಯ
ಗಳನ್ನು ಕಠಿಣಗೊಳಿಸುವುದರಿಂದ ನಾನು ಫರೋಹನಿ
ಗಿಂತಲೂ ಅವನ ಎಲ್ಲಾ ರಾಹುತರುಗಳಿಗಿಂತಲೂ ರಥಗ
ಳಿಗಿಂತಲೂ ಶಕ್ತಿಶಾಲಿ ಎಂಬುದನ್ನು ನಿಮಗೆ
ತೋರಿಸುವೆನು. 18ಆಗ ನಾನೇ ಯೆಹೋವನೆಂದು
ಈಜಿಪ್ಟಿಗೆ ತಿಳಿಯುವುದು. ನಾನು ಫರೋಹನನ್ನೂ ಅವನ
ರಾಹುತರನ್ನೂ ರಥಗಳನ್ನೂ ಸೋಲಿಸಿದಾಗ ಅವರು
ನನ್ನನ್ನು ಸನ್ಮಾನಿಸುವರು’’ ಎಂದು ಹೇಳಿದನು.

## ಯೆಹೋವನು ಈಜಿಪ್ಟಿನ ಸೈನ್ಯವನ್ನು ಸೋಲಿಸಿದನು

19ಆ ಸಮಯದಲ್ಲಿ ಯೆಹೋವನ ದೂತನು ತನ್ನ ಸ್ಥಳ
ವನ್ನು ಬಿಟ್ಟು ಅವರ ಹಿಂದಕ್ಕೆ ಬಂದನು. ಆದ್ದರಿಂದ ಅವರ
ಮುಂಭಾಗದಲ್ಲಿದ್ದ ಮೇಘಸ್ತಂಭವು ಅವರ ಹಿಂಭಾಗಕ್ಕೆ
ಹೋಯಿತು. 20ಹೀಗೆ ಮೋಡವು ಈಜಿಪ್ಟಿನವರಿಗೂ
ಇಸ್ರೇಲರಿಗೂ ನಡುವೆ ನಿಂತಿತು. ಅಲ್ಲಿ ಇಸ್ರೇಲರಿಗೆ ಬೆಳ
ಕಿತ್ತು. ಆದರೆ ಈಜಿಪ್ಟಿನವರಿಗೆ ಕತ್ತಲಿತ್ತು. ಆದ್ದರಿಂದ
ಈಜಿಪ್ಟಿನವರು ಆ ರಾತ್ರಿ ಇಸ್ರೇಲರ ಸಮೀಪಕ್ಕೆ ಬರಲಿಲ್ಲ.
21ಮೋಶೆಯು ತನ್ನ ಕೈಯನ್ನು ಕೆಂಪು ಸಮುದ್ರದ
ಮೇಲೆ ಚಾಚಿದನು; ಆಗ ಯೆಹೋವನು ಪೂರ್ವದಿಂದ
ಬಲವಾದ ಗಾಳಿಯನ್ನು ಬೀಸುವಂತೆ ಮಾಡಿದನು.
ಗಾಳಿಯು ರಾತ್ರಿಯೆಲ್ಲಾ ಬೀಸಿತು. ಸಮುದ್ರವು ಇಬ್ಭಾಗ
ವಾಗಿ ಮಧ್ಯದಲ್ಲಿ ಒಣನೆಲವಾಯಿತು. 22ಇಸ್ರೇಲರು
ಒಣನೆಲದ ಮೇಲೆ ಸಮುದ್ರವನ್ನು ದಾಟಿದರು. ನೀರು
ಅವರ ಎಡಬಲಗಳಲ್ಲಿ ಗೋಡೆಯಂತೆ ನಿಂತಿತ್ತು. 23ಆಗ
ಫರೋಹನು ತನ್ನ ಎಲ್ಲಾ ರಥಗಳೊಡನೆ ಮತ್ತು ರಾಹುತ
ರೊಡನೆ ಅವರನ್ನು ಹಿಂಬಾಲಿಸಿ ಸಮುದ್ರದೊಳಕ್ಕೆ
ಹೋದನು. 24ಬೆಳಗಿನ ಜಾವ ಇನ್ನೂ ಮೊಬ್ಬಿರುವಾಗ,
ಯೆಹೋವನು ಎತ್ತರವಾದ ಮೇಘಸ್ತಂಭದಿಂದ ಮತ್ತು
ಅಗ್ನಿ ಸ್ತಂಭದಿಂದ ಈಜಿಪ್ಟಿನ ಸೈನ್ಯವನ್ನು ದೃಷ್ಟಿಸಿದನು. ಆಗ
ಯೆಹೋವನು ಅವರ ಮೇಲೆ ದಾಳಿಮಾಡಿ ಅವರ
ಪಾಳೆಯದಲ್ಲಿ ಗಲಿಬಿಲಿ ಮಾಡಿದನು.
25ರಥಗಳ ಚಕ್ರಗಳು ನೆಲಕ್ಕೆ ಅಂಟಿಕೊಂಡವು. ರಥ
ಗಳನ್ನು ನಡಿಸುವುದು ಬಹುಕಷ್ಟವಾಗಿತ್ತು. ಈಜಿಪ್ಟಿನವರು
‘‘ನಾವು ಇಲ್ಲಿಂದ ಹೋಗೋಣ. ಯೆಹೋವನು
ಈಜಿಪ್ಟಿನ ವಿರುದ್ಧವಾಗಿ ಯುದ್ಧ ಮಾಡುತ್ತಿದ್ದಾನೆ.
ಯೆಹೋವನು ಇಸ್ರೇಲರಿಗಾಗಿ ಯುದ್ಧಮಾಡುತ್ತಿದ್ದಾನೆ’’
ಎಂದು ಕೂಗಿಕೊಂಡರು.
26ಆಗ ಯೆಹೋವನು ಮೋಶೆಗೆ, ‘‘ನಿನ್ನ ಕೈಯನ್ನು
ಸಮುದ್ರದ ಮೇಲೆ ಚಾಚು; ನೀರು ಈಜಿಪ್ಟಿನವರ ರಥಗ
ಳನ್ನು ಮತ್ತು ರಾಹುತರನ್ನು ಮುಚ್ಚಿಕೊಳ್ಳುವುದು’’ ಎಂದು
ಹೇಳಿದನು.
27ಆದ್ದರಿಂದ ಹಗಲಿನ ಬೆಳಕು ಪ್ರಕಾಶಿಸುವುದಕ್ಕಿಂತ
ಸ್ವಲ್ಪ ಮೊದಲು, ಮೋಶೆಯು ತನ್ನ ಕೈಯನ್ನು ಸಮುದ್ರದ
ಮೇಲೆ ಚಾಚಿದನು. ನೀರು ತನ್ನ ಸರಿಯಾದ ಮಟ್ಟಕ್ಕೆ
ಹಿಂತಿರುಗಿತು. ಈಜಿಪ್ಟಿನವರು ನೀರಿನಿಂದ ಓಡಿ
ಹೋಗಲು ಬಹಳವಾಗಿ ಪ್ರಯತ್ನಿಸಿದರು. ಆದರೆ
ಯೆಹೋವನು ಈಜಿಪ್ಟಿನವರನ್ನು ಸಮುದ್ರದಲ್ಲಿ ಕೆಡವಿ
ಬಿಟ್ಟನು.
28ನೀರು ತನ್ನ ಸರಿಯಾದ ಮಟ್ಟಕ್ಕೆ ಹಿಂತಿರುಗಿ ರಥ
ಗಳನ್ನು ಮತ್ತು ರಾಹುತರನ್ನು ಮುಚ್ಚಿಬಿಟ್ಟಿತು, ಸಮುದ್ರ
ದೊಳಗೆ ಹೋಗಿದ್ದ ಇಸ್ರೇಲರನ್ನು ಬೆನ್ನಟ್ಟಿದ ಫರೋಹನ

ಸೈನ್ಯವೆಲ್ಲಾ ನಾಶವಾಯಿತು. ಅವರಲ್ಲಿ ಒಬ್ಬರಾದರೂ
ಉಳಿಯಲಿಲ್ಲ.
29ಆದರೆ ಇಸ್ರೇಲರು ಒಣನೆಲದಲ್ಲಿ ಸಮುದ್ರವನ್ನು
ದಾಟಿದರು. ನೀರು ಅವರ ಎಡಬಲಗಳಲ್ಲಿ ಗೋಡೆ
ಯಂತೆ ನಿಂತಿತು. 30ಆದ್ದರಿಂದ ಆ ದಿನ ಯೆಹೋವನು
ಇಸ್ರೇಲರನ್ನು ಈಜಿಪ್ಟಿನವರಿಂದ ರಕ್ಷಿಸಿದನು. ಇಸ್ರೇಲರು
ಕೆಂಪು ಸಮುದ್ರದ ದಡದಲ್ಲಿ ಬಿದ್ದಿದ್ದ ಈಜಿಪ್ಟಿನವರ ಹೆಣಗ
ಳನ್ನು ನೋಡಿದರು. 31ಈಜಿಪ್ಟಿನವರನ್ನು ಯೆಹೋವನು
ಸೋಲಿಸಿದಾಗ ಇಸ್ರೇಲರು ಆತನ ಮಹಾಶಕ್ತಿಯನ್ನು
ನೋಡಿದರು. ಆದ್ದರಿಂದ ಜನರು ಯೆಹೋವನನ್ನು
ಸನ್ಮಾನಿಸಿ ಆತನ ಸೇವಕನಾದ ಮೋಶೆಯಲ್ಲಿ ಭರವಸೆ
ವಿಟ್ಟರು.

### ಮೋಶೆಯ ಗೀತೆ

15 ಬಳಿಕ ಮೋಶೆ ಮತ್ತು ಇಸ್ರೇಲರು ಯೆಹೋವ
ನಿಗೆ ಈ ಗೀತೆಯನ್ನು ಹಾಡತೊಡಗಿದರು:
‘‘ನಾನು ಯೆಹೋವನಿಗೆ ಹಾಡುವೆನು. ಆತನು ಮಹಾ
ಕಾರ್ಯಗಳನ್ನು ಮಾಡಿದ್ದಾನೆ. ಆತನು ಕುದುರೆಯನ್ನು
ಸವಾರನನ್ನು ಸಮುದ್ರದೊಳಗೆ ಮುಳುಗಿಸಿದನು.
2ಯೆಹೋವನೇ ನನ್ನ ಬಲ, ಆತನು ನನ್ನನ್ನು ರಕ್ಷಿಸು
ತ್ತಾನೆ. ನನ್ನ ಬಲವೂ ಕೀರ್ತನೆಯೂ ಯಾಹುವೇ; ಆತ
ನಿಂದ ನಮಗೆ ರಕ್ಷಣೆ ಉಂಟಾಯಿತು. ಯೆಹೋವನು
ನನ್ನ ದೇವರು. ಮತ್ತು ನಾನು ಆತನನ್ನು ಸ್ತುತಿಸುತ್ತೇನೆ.
ಯೆಹೋವನೇ ನಮ್ಮ ಪೂರ್ವಿಕರ. ದೇವರು. ನಾನು
ಆತನನ್ನು ಸನ್ಮಾನಿಸುತ್ತೇನೆ.
3ಯೆಹೋವನೇ ಯುದ್ಧವೀರನು. ಆತನ ನಾಮಧೇ
ಯವು ಯೆಹೋವನೇ.
4ಆತನು ಫರೋಹನ ರಥಗಳನ್ನೂ ಸೈನಿಕರನ್ನೂ
ಸಮುದ್ರದೊಳಗೆ ಕೆಡವಿದನು; ಫರೋಹನ ಮಹಾ
ವೀರರನ್ನು ಕೆಂಪು ಸಮುದ್ರದಲ್ಲಿ ಮುಳುಗಿಸಿಬಿಟ್ಟನು.
5ಸಾಗರವು ಅವರನ್ನು ಮುಚ್ಚಿಕೊಂಡಿತು; ಆಳವಾದ
ನೀರಿನಲ್ಲಿ ಅವರು ಬಂಡೆಗಳಂತೆ ಮುಳುಗಿದರು.
6‘‘ನಿನ್ನ ಭುಜಬಲವು ಎಷ್ಟೋ ಶಕ್ತಿಯುಳ್ಳದ್ದಾಗಿದೆ.
ಯೆಹೋವನೇ, ನಿನ್ನ ಭುಜಬಲವು ವೈರಿಯನ್ನು ನುಚ್ಚು
ನೂರು ಮಾಡಿತು.
7ನೀನು ಅತ್ಯಧಿಕ ಮಹತ್ವವುಳ್ಳವನಾಗಿ, ನನಗೆದುರು
ನಿಲ್ಲುವವರನ್ನು ನಾಶಗೊಳಿಸಿದೆ. ಬೆಂಕಿಯು ಹುಲ್ಲನ್ನು
ಸುಡುವಂತೆ ನಿನ್ನ ಕೋಪವು ಅವರನ್ನು ನಾಶಮಾಡಿತು.
8ನೀನು ಊದಿದ ಮಹಾ ಗಾಳಿಯಿಂದ ನೀರು ಒತ್ತಟ್ಟಿಗೆ
ಸೇರಿತು. ವೇಗವಾಗಿ ಹರಿಯುವ ನೀರು ಗಟ್ಟಿಯಾದ
ಗೋಡೆಯಾಯಿತು. ಸಾಗರಗರ್ಭದೊಳಗಿನ ಜಲವು
ಗಟ್ಟಿಯಾಯಿತು.
9‘‘ನಾವು ಅವರನ್ನು ಬೆನ್ನಟ್ಟಿ ಹಿಡಿಯುವೆವು; ನಾವು
ಅವರ ಸಂಪತ್ತನ್ನೆಲ್ಲಾ ತೆಗೆದುಕೊಳ್ಳುವೆವು. ನಾವು ಖಡ್ಗ
ದಿಂದ ಅವರನ್ನು ಸಂಹರಿಸುವೆವು. ನಮ್ಮ ಭುಜಬಲದಿಂದ
ಅವರ ಸ್ವತ್ತುಗಳನ್ನೆಲ್ಲಾ ವಶಪಡಿಸಿಕೊಳ್ಳುವೆವು’ ಎಂದು
ಕೊಂಡರು ವೈರಿಗಳು.
10ಆದರೆ ನೀನು ಅವರ ಮೇಲೆ ಊದಿದ ಗಾಳಿಯಿಂದ
ಸಮುದ್ರವು ಅವರನ್ನು ಮುಚ್ಚಿಕೊಂಡಿತು; ಅವರು ಸೀಸ
ದಂತೆ ಅಗಾಧವಾದ ಸಮುದ್ರದಲ್ಲಿ ಮುಳುಗಿದರು.
11ಯೆಹೋವನೇ ದೇವರುಗಳಲ್ಲಿ ನಿನಗೆ ಸಮಾನರು
ಯಾರು? ಪರಿಶುದ್ಧತೆಯಲ್ಲಿ ನೀನೇ ಸರ್ವೋತ್ತಮನು.
ಭಯಂಕರ ಕೃತ್ಯಗಳನ್ನು ಮಾಡಿ ಪ್ರಖ್ಯಾತಿಹೊಂದಿದ
ವನೂ ನೀನೇ. ಅದ್ಭುತಕಾರ್ಯಗಳನ್ನು ಮಾಡುವಾತನೂ
ನೀನೇ.
12ನೀನು ನಿನ್ನ ಬಲಗೈಯನ್ನು ಚಾಚಿದಾಗ ಭೂಮಿಯು
ಶತ್ರುಗಳನ್ನು ನುಂಗಿಬಿಟ್ಟಿತು!
13ನೀನು ಬಿಡುಗಡೆ ಮಾಡಿದ ನಿನ್ನ ಜನರನ್ನು ಪ್ರೀತಿ
ಯಿಂದ ನಡೆಸುವೆ. ನಿನ್ನ ಬಲದಿಂದ ನೀನು ಈ ಜನರನ್ನು
ನಿನ್ನ ಪವಿತ್ರವಾದ ದೇಶಕ್ಕೆ ನಡಿಸುವೆ.
14‘‘ಬೇರೆ ಜನಾಂಗಗಳವರು ಇದನ್ನು ಕೇಳಿ ಭಯಭೀತ
ರಾಗುವರು; ಫಿಲಿಷ್ಟಿಯರು ಭಯದಿಂದ ತಲ್ಲಣಿಸುವರು.
15ಆಗ ಎದೋಮಿನ ಕುಟುಂಬಗಳು ಭಯಭೀತ
ರಾಗುವರು. ಮೋವಾಬಿನ ನಾಯಕರು ಭಯದಿಂದ
ನಡುಗುವರು. ಕಾನಾನಿನ ಜನರು ತಮ್ಮ ಧೈರ್ಯವನ್ನು
ಕಳೆದುಕೊಳ್ಳುವರು.
16ನಿನ್ನ ಭುಜಬಲವನ್ನು ಅವರು ಕಂಡು ಭಯಭೀತ
ರಾಗುವರು. ಯೆಹೋವನ ಜನರು ದಾಟಿ ಹೋಗುವವ
ರೆಗೆ, ನೀನು ರೂಪಿಸಿದ ಜನರು ದಾಟಿ ಹೋಗುವವರೆಗೆ,
ಅವರು ಬಂಡೆಯಂತೆ ಮೌನವಾಗಿರುವರು.
17ನೀನು ನಿನ್ನ ಜನರನ್ನು ನಿನ್ನ ಬೆಟ್ಟದ ಸೀಮೆಗೂ ನಿನ್ನ
ಸಿಂಹಾಸನಕ್ಕಾಗಿ ನೀನು ಸಿದ್ಧಮಾಡಿದ ಸ್ಥಳಕ್ಕೂ ನಡಿಸುವೆ.
ಯೆಹೋವನೇ, ಒಡೆಯನೇ, ನಿನ್ನ ಕೈಗಳಿಂದ ನಿನ್ನ
ಆಲಯವನ್ನು ಕಟ್ಟು. 18ಯೆಹೋವನು ಎಂದೆಂದಿಗೂ
ಆಳುವನು!’’ 19ಫರೋಹನ ಕುದುರೆಗಳು, ಸವಾರರು,
ರಥಗಳು ಸಮುದ್ರದೊಳಕ್ಕೆ ಹೋದಾಗ ಸಮುದ್ರದ
ನೀರು ಅವರನ್ನು ಆವರಿಸಿಕೊಳ್ಳುವಂತೆ ಯೆಹೋವನು
ಮಾಡಿದನು. ಇಸ್ರೇಲರಾದರೊ ಸಮುದ್ರದೊಳಗಿನ ಒಣ
ನೆಲದಲ್ಲಿ ಸಮುದ್ರವನ್ನು ದಾಟಿಹೋದರು.
20ಆರೋನನ ಅಕ್ಕ ಮಿರ್ಯಾಮಳು ಪ್ರವಾದಿನಿ
ಯಾಗಿದ್ದಳು. ಆಕೆ ದಮ್ಮಡಿಯನ್ನು ತೆಗೆದುಕೊಂಡಳು.
ಮಿರ್ಯಾಮಳು ಮತ್ತು ಸ್ತ್ರೀಯರು ಹಾಡುವುದಕ್ಕೂ ಕುಣಿ
ಯುವುದಕ್ಕೂ ಪ್ರಾರಂಭಿಸಿದರು. ಮಿರ್ಯಾಮಳು ಅವರ
ಹಾಡಿಗೆ ಹೀಗೆ ಪಲ್ಲವಿ ಹಾಡಿದಳು.

21‘‘ಯೆಹೋವನಿಗೆ ಗಾನಮಾಡಿರಿ; ಆತನು ಮಹಾ
ಜಯಶಾಲಿಯಾದನು. ಕುದುರೆಗಳನ್ನೂ ರಾಹುತರನ್ನೂ
ಸಮುದ್ರದೊಳಗೆ ಮುಳುಗಿಸಿ ನಾಶಮಾಡಿದನು...’’
22ಮೋಶೆಯು ಇಸ್ರೇಲರನ್ನು ಕೆಂಪುಸಮುದ್ರದಿಂದ
ಮುನ್ನೆಡಿಸಿದನು. ಅವರು ಶೂರಿನ ಅರಣ್ಯದೊಳಗೆ
ಹೋದರು. ಅವರು ಅರಣ್ಯದಲ್ಲಿ ಮೂರು ದಿನಗಳವರೆಗೆ
ಪ್ರಯಾಣ ಮಾಡಿದರು. ಜನರಿಗೆ ಎಲ್ಲಿಯೂ ನೀರು
ಸಿಕ್ಕಲಿಲ್ಲ. 23ಆ ಬಳಿಕ ಅವರು ಮಾರಾ* ಎಂಬ ಸ್ಥಳವನ್ನು
ತಲುಪಿದರು. ಅಲ್ಲಿ ನೀರಿತ್ತು. ಆದರೆ ಅವರು ಆ ನೀರನ್ನು
ಕುಡಿಯಲಾಗಲಿಲ್ಲ. ಯಾಕಂದರೆ ಅದು ಬಹು ಕಹಿ
ಯಾಗಿತ್ತು. (ಆದಕಾರಣವೇ ಆ ಸ್ಥಳಕ್ಕೆ ‘ಮಾರಾ’
ಎಂಬುದಾಗಿ ಹೆಸರು ಕೊಡಲ್ಪಟ್ಟಿತ್ತು.)
24ಅವರು ಮೋಶೆಗೆ ದೂರು ಹೇಳತೊಡಗಿದರು. ಈಗ,
‘‘ನಾವೇನು ಕುಡಿಯೋಣ?’’ ಎಂದು ಅವರು
ಕೇಳಿದರು.
25ಮೋಶೆಯು ಯೆಹೋವನಿಗೆ ಪ್ರಾರ್ಥಿಸಲು ಆತನು
ಅವನಿಗೆ ಒಂದು ಗಿಡವನ್ನು ತೋರಿಸಿದನು. ಮೋಶೆಯು
ಆ ಗಿಡವನ್ನು ನೀರಿನಲ್ಲಿ ಹಾಕಿದಾಗ ಕಹಿನೀರು ಸಿಹಿ
ನೀರಾಯಿತು.

ಆ ಸ್ಥಳದಲ್ಲಿ ಯೆಹೋವನು ಅವರಿಗಾಗಿ ನಿಯಮವನ್ನು
ಮಾಡಿದನು. ಯೆಹೋವನು ಅವರ ನಂಬಿಕೆಯನ್ನು ಸಹ
ಪರೀಕ್ಷಿಸಿದನು. 26ಆತನು ಅವರಿಗೆ, ‘‘ನೀವು ನಿಮ್ಮ ದೇವ
ರಾದ ಯೆಹೋವನ ಮಾತನ್ನು ಶ್ರದ್ಧೆಯಿಂದ ಕೇಳಿ ಆತನ
ದೃಷ್ಟಿಗೆ ಯೋಗ್ಯವಾದವುಗಳನ್ನು ಮಾಡಬೇಕು; ಆತನ
ಆಜ್ಞೆಗಳಿಗೆ ವಿಧೇಯರಾಗಿದ್ದು ಆತನ ಕಟ್ಟಳೆಗಳನ್ನೆಲ್ಲಾ
ಅನುಸರಿಸಬೇಕು. ಆಗ ನಾನು ಈಜಿಪ್ಟಿನವರಿಗೆ ಉಂಟು
ಮಾಡಿದ ಕಾಯಿಲೆಗಳಲ್ಲಿ ಒಂದನ್ನೂ ನಿಮಗೆ ಬರಗೊಡಿ
ಸುವುದಿಲ್ಲ. ಯೆಹೋವನೆಂಬ ನಾನೇ ನಿಮಗೆ ಆರೋಗ್ಯ
ದಾಯಕನಾಗಿದ್ದೇನೆ’’ ಎಂದುಹೇಳಿದನು.
27ಬಳಿಕ ಜನರು ಏಲೀಮಿಗೆ ಪ್ರಯಾಣ ಮಾಡಿದರು.
ಏಲೀಮಿನಲ್ಲಿ ನೀರಿನ ಹನ್ನೆರಡು ಬುಗ್ಗೆಗಳಿದ್ದವು; ಅಲ್ಲಿ
ಎಪ್ಪತ್ತು ಖರ್ಜೂರದ ಮರಗಳಿದ್ದವು. ಆದ್ದರಿಂದ ಅವರು
ನೀರಿನ ಹತ್ತಿರ ತಮ್ಮ ಪಾಳೆಯ ಹಾಕಿದರು.

16 ಬಳಿಕ ಅವರು ಏಲೀಮಿನಿಂದ ಪ್ರಯಾಣಮಾಡಿ
ಸಿನ್ ಅರಣ್ಯಕ್ಕೆ ಬಂದರು. ಈ ಸ್ಥಳವು ಏಲೀಮಿನ
ಮತ್ತು ಸೀನಾಯಿಬೆಟ್ಟದ ನಡುವೆ ಇತ್ತು. ಈಜಿಪ್ಟನ್ನು ಬಿಟ್ಟ
ನಂತರ ಎರಡನೆಯ ತಿಂಗಳಿನ ಹದಿನೈದನೆಯ ದಿನದಲ್ಲಿ*
ಅವರು ಈ ಸ್ಥಳಕ್ಕೆ ಬಂದರು. 2ಆಗ ಇಸ್ರೇಲರು ಮತ್ತೆ
ಗೊಣಗುಟ್ಟಲು ಪ್ರಾರಂಭಿಸಿದರು. ಅವರು ಮರು
ಭೂಮಿಯಲ್ಲಿ ಮೋಶೆ ಆರೋನರ ಮೇಲೆ ಗೊಣಗುಟ್ಟಿ
ದರು. 3ಅವರು, ‘‘ಯೆಹೋವನು ನಮ್ಮನ್ನು ಈಜಿಪ್ಟಿನಲ್ಲಿ
ಕೊಂದಿದ್ದರೆ ಎಷ್ಟೋ ಒಳ್ಳೆಯದಾಗುತ್ತಿತ್ತು. ನಮಗೆ
ಈಜಿಪ್ಟಿನಲ್ಲಿ ಮಾಂಸವೂ ರೊಟ್ಟಿಯೂ ಇತ್ತು. ನಮಗೆ
ಬೇಕಿದ್ದ ಆಹಾರವೆಲ್ಲಾ ನಮ್ಮಲ್ಲಿತ್ತು. ಆದರೆ ಈಗ ನೀವು
ನಮ್ಮನ್ನು ಈ ಅರಣ್ಯಕ್ಕೆ ಕರೆದುಕೊಂಡು ಬಂದಿರಿ.
ನಾವೆಲ್ಲರೂ ಇಲ್ಲಿ ಹಸಿವೆಯಿಂದ ಸಾಯುವೆವು’’ ಎಂದು
ಹೇಳಿದರು. 4ಆಗ ಯೆಹೋವನು ಮೋಶೆಗೆ,‘‘ ಆಕಾಶ
ದಿಂದ ನಿಮಗೋಸ್ಕರ ರೊಟ್ಟಿ ಸುರಿಯುವಂತೆ ಮಾಡು
ವೆನು. ಪ್ರತಿದಿನ ಅವರು ಹೊರಗೆ ಹೋಗಿ, ತಮಗೆ ಆ
ದಿನದಲ್ಲಿ ತಿನ್ನಲು ಬೇಕಾದ ಆಹಾರವನ್ನು ಕೂಡಿಸಿಕೊಳ್ಳ
ಬೇಕು. ನಾನು ಹೇಳುವುದನ್ನು ಅವರು ಮಾಡುತ್ತಾರೊ
ಇಲ್ಲವ್ರೊ ಎಂದು ನೋಡಲು ನಾನು ಇದನ್ನು ಮಾಡು
ವೆನು. 5ಪ್ರತಿದಿನವು ಅವರು ಒಂದು ದಿನಕ್ಕೆ ಬೇಕಾದಷ್ಟು
ಆಹಾರವನ್ನು ಕೂಡಿಸಿಕೊಳ್ಳಬೇಕು. ಆದರೆ ಶುಕ್ರವಾರ*
ಅವರು ತಮ್ಮ ಆಹಾರವನ್ನು ಸಿದ್ಧಪಡಿಸುವಾಗ ಎರಡು
ದಿನಗಳಿಗೆ ಬೇಕಾದಷ್ಟು ಆಹಾರವಿರುವುದನ್ನು ಅವರು
ನೋಡುವರು’’ ಎಂದು ಹೇಳಿದನು.
6ಆದ್ದರಿಂದ ಮೋಶೆಯು ಮತ್ತು ಆರೋನನು ಇಸ್ರೇಲ
ರಿಗೆ, ‘‘ಈ ರಾತ್ರಿ ನೀವು ಯೆಹೋವನ ಶಕ್ತಿಯನ್ನು
ನೋಡುವಿರಿ. ನಿಮ್ಮನ್ನು ಈಜಿಪ್ಟಿನಿಂದ ರಕ್ಷಿಸಿದವನು
ಆತನೇ ಎಂದು ತಿಳಿದುಕೊಳ್ಳುವಿರಿ. 7ನಾಳೆ ಬೆಳಿಗ್ಗೆ ನೀವು
ಯೆಹೋವನ ಮಹಿಮೆಯನ್ನು ನೋಡುವಿರಿ. ನೀವು
ಯೆಹೋವನ ಮೇಲೆ ಗೊಣಗುಟ್ಟಿದ್ದೀರಿ. ಆತನು ನಿಮ್ಮ
ಗೊಣಗುಟ್ಟುವಿಕೆಯನ್ನು ಕೇಳಿದ್ದಾನೆ; ಆತನೇ ನಿಮಗೆ
ಸಹಾಯ ಮಾಡುವನು. ನಮ್ಮ ಮೇಲೆ ನೀವು ಗೊಣ
ಗುಟ್ಟುತ್ತಾ ಬರಲು ನಾವೆಷ್ಟರವರು? ನಿಮ್ಮನ್ನು ಈಜಿಪ್ಟಿ
ನಿಂದ ಕರೆತಂದವನು ಯೆಹೋವನೇ. ಆತನೇ ನಿಮ್ಮ
ಅಗತ್ಯತೆಗಳನ್ನು ಪೂರೈಸುವನು’’ ಎಂದು ಹೇಳಿದರು.
8ಅಲ್ಲದೆ ಮೋಶೆಯು, ‘‘ನೀವು ಗೊಣಗುಟ್ಟುತ್ತಿರುವು
ದನ್ನು ಯೆಹೋವನು ಕೇಳಿದ್ದಾನೆ. ಆದ್ದರಿಂದ ರಾತ್ರಿ
ಯಲ್ಲಿ ಆತನು ನಿಮಗೆ ಮಾಂಸವನ್ನು ಕೊಡುವನು ಪ್ರತಿ
ಮುಂಜಾನೆ ನಿಮಗೆ ಬೇಕಾದಷ್ಟು ರೊಟ್ಟಿಯು ದೊರಕು
ವುದು. ನೀವು (ಆರೋನನ ಮೇಲೂ ನನ್ನ ಮೇಲೂ)
ಗೊಣಗುಟ್ಟುತ್ತಿದ್ದೀರಿ? ಆದರೆ ನಮಗೆ ದೂರುಹೇಳಲು
ನಾವೆಷ್ಟರವರು ? ನೀವು ಯೆಹೋವನ ವಿರುದ್ಧವಾಗಿ
ದೂರು ಹೇಳುತ್ತಿದ್ದೀರೆಂಬುದು ನಿಮ್ಮ ಜ್ಞಾಪಕದಲ್ಲಿರಲಿ’’
ಎಂದು ಹೇಳಿದನು.

---

**ಮಾರಾ** ಈ ಹೆಸರಿನ ಅರ್ಥ ‘‘ಕಹಿ’’ ಎಂಬದಾಗಿ.

**ಎರಡನೆ ತಿಂಗಳಿನ ಹದಿನೈದನೆಯ ದಿನದಲ್ಲಿ** ವೈಶಾಖ ಮಾಸದ ಹದಿನೈದನೆಯ ದಿನ. ಇಸ್ರೇಲರು ಒಂದು ತಿಂಗಳಿಂದ ಪ್ರಯಾಣ ಮಾಡುತ್ತಿದ್ದರು.

**ಶುಕ್ರವಾರ** ವಾರದ ಆರನೆ ದಿನ. ಶನಿವಾರ ಸಬ್ಬತ್ ದಿನವಾಗಿತ್ತು. ಸಬ್ಬತ್ ದಿನ ವಿಶ್ರಾಂತಿಯ ದಿನವಾಗಿದ್ದರಿಂದ ಅಂದು ಅವರು ಕೆಲಸ ಮಾಡ ತಕ್ಕದ್ದಾಗಿರಲಿಲ್ಲ.

[9]ಬಳಿಕ ಮೋಶೆ ಆರೋನನಿಗೆ, ‘‘ಇಸ್ರೇಲರೊಂದಿಗೆ
ಮಾತಾಡು. ಅವರಿಗೆ,‘ಯೆಹೋವನ ಮುಂದೆ ಒಟ್ಟಾಗಿ
ನೆರೆದು ಬನ್ನಿ; ಯಾಕಂದರೆ ಆತನು ನಿಮ್ಮ ಗೊಣಗುಟ್ಟು
ವಿಕೆಗಳನ್ನು ಕೇಳಿದ್ದಾನೆ’ ಎಂದು ಹೇಳು’’ ಅಂದನು.
[10]ಆರೋನನು ಇಸ್ರೇಲರೆಲ್ಲರೊಂದಿಗೆ ಮಾತಾಡಿ
ದನು. ಅವರೆಲ್ಲರೂ ಒಂದು ಸ್ಥಳದಲ್ಲಿ ಕೂಡಿಬಂದರು.
ಆರೋನನು ಅವರೊಂದಿಗೆ ಮಾತಾಡುತ್ತಿದ್ದಾಗ ಅವ
ರೆಲ್ಲರೂ ಅರಣ್ಯದ ಕಡೆಗೆ ತಿರುಗಿನೋಡಿದರು. ಮೇಘ
ದಲ್ಲಿ ಯೆಹೋವನ ಮಹಿಮೆಯು ಪ್ರತ್ಯಕ್ಷವಾದದ್ದನ್ನು
ಅವರೆಲ್ಲರೂ ಕಂಡರು.
[11]ಯೆಹೋವನು ಮೋಶೆಗೆ, [12]‘‘ನಾನು ಇಸ್ರೇಲರ
ಗೊಣಗುಟ್ಟುವಿಕೆಗಳನ್ನು ಕೇಳಿದ್ದೇನೆ. ಆದ್ದರಿಂದ ಅವರಿಗೆ
ಹೀಗೆ ಹೇಳು: ‘ಸೂರ್ಯಾಸ್ತಮದ ಮುನ್ನ ನೀವು ಮಾಂಸ
ವನ್ನು ತಿನ್ನುವಿರಿ; ಪ್ರತಿ ಮುಂಜಾನೆ ಸೂರ್ಯೋದಯದ
ಮುನ್ನ ನಿಮಗೆ ಬೇಕಾದಷ್ಟು ರೊಟ್ಟಿಯನ್ನು ತಿನ್ನುವಿರಿ.
ಆಗ ನಾನೇ ಯೆಹೋವನಾದ ದೇವರೆಂಬುದನ್ನು ನೀವು
ತಿಳಿದುಕೊಳ್ಳುವಿರಿ; ನನ್ನಲ್ಲಿ ಭರವಸೆ ಇಡುವಿರಿ’’ ಎಂದು
ಹೇಳಿದನು.
[13]ಸಾಯಂಕಾಲ ಲಾವಕ್ಕಿಗಳು ಪಾಳೆಯದ ಸುತ್ತಲೂ
ಬಂದವು. ಜನರು ಮಾಂಸಕ್ಕಾಗಿ ಈ ಪಕ್ಷಿಗಳನ್ನು ಹಿಡಿದರು
ಮತ್ತು ಪ್ರತಿ ಮುಂಜಾನೆ ಅವರ ಪಾಳೆಯದ ಸುತ್ತಲೂ
ಮಂಜು ನೆಲದ ಮೇಲೆ ಬಿದ್ದಿತ್ತು. [14]ಸೂರ್ಯನು ಮೇಲ
ಕ್ಕೇರಿದ ನಂತರ ಮಂಜು ಕರಗಿ ಇಲ್ಲವಾಯಿತು. ಆದರೆ
ಮಂಜು ಕರಗಿ ಹೋದನಂತರ ನೆಲದ ಮೇಲೆ ಮಂಜಿನ
ಹನಿ ಗಳಂತಿದ್ದ ತೆಳುವಾದ ಕಾಳುಗಳು ಬಿದ್ದಿದ್ದವು.
[15]ಇಸ್ರೇಲರು ಅದನ್ನು ನೋಡಿ ‘‘ಏನದು’’* ಎಂಬು
ದಾಗಿ ಒಬ್ಬರನ್ನೊಬ್ಬರು ಕೇಳಿದರು. ಅದು ಏನೆಂದು
ಅವರಿಗೆ ಗೊತ್ತಿಲ್ಲದ ಕಾರಣ ಅವರು ಈ ಪ್ರಶ್ನೆಯನ್ನು
ಕೇಳಿದರು. ಆದ್ದರಿಂದ ಮೋಶೆ ಅವರಿಗೆ, ‘‘ಇದು
ಯೆಹೋವನು ನಿಮಗೆ ಕೊಟ್ಟಿರುವ ಆಹಾರ.
[16]ಯೆಹೋವನು ಆಜ್ಞಾಪಿಸುವುದೇನೆಂದರೆ, ‘ಪ್ರತಿ
ಯೊಬ್ಬನು ತನಗೆ ಬೇಕಾದಷ್ಟನ್ನು ಮಾತ್ರ ಕೂಡಿಸಿಕೊಳ್ಳ
ಬೇಕು. ನಿಮ್ಮಲ್ಲಿ ಪ್ರತಿಯೊಬ್ಬನು ನಿಮ್ಮ ಕುಟುಂಬದ
ಲ್ಲಿರುವ ಪ್ರತಿಯೊಬ್ಬನಿಗೆ ಸುಮಾರು ಒಂದು ಮೂರು
ಸೇರಿನಷ್ಟು ಕೂಡಿಸಿಕೊಳ್ಳಬೇಕು’’ ಎಂದು ಹೇಳಿದನು.
[17]ಅಂತೆಯೇ ಇಸ್ರೇಲರು ಮಾಡಿದರು. ಪ್ರತಿ
ಯೊಬ್ಬನೂ ತನ್ನ ಆಹಾರವನ್ನು ಕೂಡಿಸಿಕೊಂಡನು.
ಕೆಲವರು ಇತರರಿಗಿಂತ ಹೆಚ್ಚಾಗಿ ಕೂಡಿಸಿಕೊಂಡರು.
[18]ಅವರು ತಮ್ಮ ಕುಟುಂಬದಲ್ಲಿದ್ದ ಪ್ರತಿಯೊಬ್ಬರ ಆಹಾರ
ವನ್ನು ಒಟ್ಟಾಗಿ ಸೇರಿಸಿ ಅಳತೆಮಾಡಿದಾಗ ಅಲ್ಲಿ ಯಾವಾ
ಗಲೂ ಪ್ರತಿಯೊಬ್ಬನಿಗೆ ಬೇಕಾದಷ್ಟು ಮಾತ್ರ ಆಹಾರ
ವಿರುತ್ತಿತ್ತು. ಅದು ಹೆಚ್ಚಾಗಿಯೂ ಇರುತ್ತಿರಲಿಲ್ಲ; ಕಡಿಮೆ
ಯಾಗಿಯೂ ಇರುತ್ತಿರಲಿಲ್ಲ. ಹೀಗೆ ಪ್ರತಿಯೊಬ್ಬನು ತನಗೆ
ಮತ್ತು ತನ್ನ ಕುಟುಂಬಕ್ಕೆ ಬೇಕಾದಷ್ಟನ್ನು ಮಾತ್ರ ಕೂಡಿಸಿ
ಕೊಂಡನು.
[19]ಮೋಶೆಯು ಅವರಿಗೆ, ‘‘ಆಹಾರವನ್ನು ಮರು
ದಿನಕ್ಕಾಗಿ ಉಳಿಸಿಕೊಳ್ಳಬೇಡಿರಿ’’ ಎಂದು ಹೇಳಿದನು.
[20]ಆದರೆ ಅವರು ಮೋಶೆಯ ಮಾತಿಗೆ ವಿಧೇಯರಾಗ
ಲಿಲ್ಲ. ಕೆಲವು ಜನರು ಮರುದಿನ ತಿನ್ನುವುದಕ್ಕಾಗಿ ಆಹಾರ
ವನ್ನು ಉಳಿಸಿಕೊಂಡರು; ಹೀಗೆ ಉಳಿಸಿಟ್ಟ ಆಹಾರವು
ಹುಳಗಳಿಂದ ತುಂಬಿ ಕೊಳೆಯತೊಡಗಿತು. ಮೋಶೆಯು
ಹೀಗೆ ಮಾಡಿದ ಜನರ ಮೇಲೆ ಕೋಪಗೊಂಡನು.
[21]ಪ್ರತಿ ಮುಂಜಾನೆ ಅವರು ಆಹಾರವನ್ನು ಕೂಡಿಸಿ
ಕೊಂಡರು. ಪ್ರತಿಯೊಬ್ಬನು ತಾನು ಎಷ್ಟು ತಿನ್ನಬಹುದೋ
ಅಷ್ಟನ್ನೇ ಕೂಡಿಸಿಕೊಂಡನು. ಆದರೆ ಬಿಸಿಲೇರಿದಾಗ
ಆಹಾರವು ಕರಗಿಹೋಯಿತು.
[22]ಆರನೆಯ ದಿನವಾದ ಶುಕ್ರವಾರದಲ್ಲಿ ಜನರು ಎರಡ
ರಷ್ಟನ್ನು ಕೂಡಿಸಿಕೊಂಡರು. ಅವರು ಪ್ರತಿಯೊಬ್ಬನಿಗೆ
ಆರು ಸೇರಿನಷ್ಟು ಕೂಡಿಸಿಕೊಂಡರು. ಆದ್ದರಿಂದ ಜನ
ನಾಯಕರೆಲ್ಲರೂ ಬಂದು ಮೋಶೆಗೆ ಇದನ್ನು ತಿಳಿಸಿದರು.
[23]ಮೋಶೆಯು ಅವರಿಗೆ, ‘‘ಯೆಹೋವನೇ ಇದರ ಬಗ್ಗೆ
ತಿಳಿಸಿದ್ದನು. ನಾಳೆ ಮುಂಜಾನೆ ಯೆಹೋವನನ್ನು ಸನ್ಮಾನಿ
ಸತಕ್ಕ ವಿಶೇಷ ವಿಶ್ರಾಂತಿ ದಿನವಾದ ಸಬ್ಬತ್ತಾಗಿದೆ. ಆದುದ
ರಿಂದ ಇದು ಹೀಗೆ ಸಂಭವಿಸಿತು. ಈ ದಿನಕ್ಕೆ ಬೇಕಾದ
ಅಡಿಗೆಯನ್ನು ನೀವು ತಯಾರಿಸಿಕೊಳ್ಳಿರಿ. ಆದರೆ ಈ
ಆಹಾರದಲ್ಲಿ ಉಳಿದದ್ದನ್ನು ನಾಳೆ ಪ್ರಾತಃಕಾಲಕ್ಕಾಗಿ
ಉಳಿಸಿಕೊಳ್ಳಿರಿ’’ ಎಂದು ಹೇಳಿದನು.
[24]ಆದ್ದರಿಂದ ಉಳಿದ ಆಹಾರವನ್ನು ಜನರು ಮರುದಿನ
ಕ್ಕಾಗಿ ಉಳಿಸಿದರು; ಆದರೆ ಆ ಆಹಾರವು ಕೆಡಲಿಲ್ಲ ಮತ್ತು
ಹುಳಗಳು ಆ ಆಹಾರಕ್ಕೆ ಬರಲಿಲ್ಲ.
[25]ಶನಿವಾರದಲ್ಲಿ ಮೋಶೆಯು ಜನರಿಗೆ, ‘‘ಈ ದಿನ
ಸಬ್ಬತ್ತಾಗಿದೆ. ಇದು ಯೆಹೋವನನ್ನು ಸನ್ಮಾನಿಸುವುದ
ಕ್ಕಿರುವ ವಿಶೇಷವಾದ ವಿಶ್ರಾಂತಿ ದಿನವಾಗಿದೆ. ನೀವು ನಿನ್ನೆ
ಯಿಂದ ಇಟ್ಟುಕೊಂಡಿದ್ದ ಆಹಾರವನ್ನು ಊಟಮಾಡಿರಿ.
ಇಂದು ನೀವು ಹೊಲದಲ್ಲಿ ಯಾವ ಆಹಾರವನ್ನೂ ಕಾಣು
ವುದಿಲ್ಲ. [26]ನೀವು ಆರುದಿನಗಳಲ್ಲಿ ಆಹಾರವನ್ನು ಕೂಡಿಸ
ಬೇಕು. ಆದರೆ ವಾರದ ಏಳನೆಯ ದಿನವು ಸಬ್ಬತ್
ದಿನವಾಗಿದೆ ಅಂದರೆ ವಿಶ್ರಾಂತಿಯ ದಿನವಾಗಿದೆ. ಆದ್ದ
ರಿಂದ ಆ ದಿನದಲ್ಲಿ ನೆಲದ ಮೇಲೆ ಯಾವ ಆಹಾರವೂ
ಇರುವುದಿಲ್ಲ’’ ಅಂದನು.
[27]ಏಳನೆಯ ದಿನದಲ್ಲಿ (ಶನಿವಾರ) ಕೆಲವು ಜನರು
ಆಹಾರವನ್ನು ಕೂಡಿಸಿಕೊಳ್ಳಲು ಹೊರಗೆ ಹೋದರು,
ಆದರೆ ಅವರಿಗೆ ಏನೂ ಸಿಕ್ಕಲಿಲ್ಲ. [28]ಆಗ ಯೆಹೋವನು

---

**ಏನದು** ಇಬ್ರಿಯ ಭಾಷೆಯಲ್ಲಿ ಇದು ‘‘ಮನ್ನ’’ ಎಂಬ ಪದದಂತಿದೆ.

ಮೋಶೆಗೆ, ‘‘ಜನರೇ, ನೀವು ಇನ್ನೆಷ್ಟರವರೆಗೆ ನನ್ನ ಆಜ್ಞೆ
ಗಳಿಗೆ ಮತ್ತು ಬೋಧನೆಗಳಿಗೆ ವಿಧೇಯರಾಗುವುದಿಲ್ಲ?
29ನೋಡಿರಿ, ಯೆಹೋವನು ಸಬ್ಬತ್‌ದಿನವನ್ನು ನಿಮಗೆ
ವಿಶ್ರಾಂತಿ ದಿನವನ್ನಾಗಿ ಮಾಡಿದ್ದಾನೆ. ಆದ್ದರಿಂದ
ಯೆಹೋವನು ಶುಕ್ರವಾರದಂದು ನಿಮಗೆ ಎರಡು ದಿನ
ಗಳಿಗೆ ಬೇಕಾದಷ್ಟು ಆಹಾರವನ್ನು ಕೊಡುವನು. ಆದ್ದ
ರಿಂದ ಸಬ್ಬತ್ತಿನಲ್ಲಿ ನಿಮ್ಮಲ್ಲಿ ಪ್ರತಿಯೊಬ್ಬನು ಕುಳಿತು
ಕೊಂಡು ವಿಶ್ರಮಿಸಿಕೊಳ್ಳಬೇಕು. ನೀವು ಇರುವಲ್ಲೇ
ಇರಿ’’ ಎಂದು ಹೇಳಿದನು. 30ಆದ್ದರಿಂದ ಜನರು ಸಬ್ಬತ್ತಿ
ನಲ್ಲಿ ವಿಶ್ರಮಿಸಿಕೊಂಡರು.

31ಜನರು ಈ ವಿಶೇಷ ಆಹಾರವನ್ನು ಮನ್ನ* ಎಂದು
ಕರೆಯತೊಡಗಿದರು. ಮನ್ನವು ಚಿಕ್ಕದಾದ ಬಿಳಿ
ಕೊತ್ತುಂಬರಿ ಬೀಜಗಳಂತಿದ್ದವು ಮತ್ತು ಜೇನುತುಪ್ಪ
ದಿಂದ ಮಾಡಿದ ತೆಳುವಾದ ರೊಟ್ಟಿಯಂತೆ ರುಚಿ
ಯಾಗಿತ್ತು. 32ಮೋಶೆಗೆ ‘‘ಯೆಹೋವನು ಆಜ್ಞಾಪಿಸಿದ್ದೇ
ನಂದರೆ, ‘ಮೂರು ಸೇರಿನಷ್ಟು ಮನ್ನವನ್ನು ನಿಮ್ಮ
ಮುಂದಿನ ಸಂತತಿಯವರಿಗಾಗಿ ಉಳಿಸಿರಿ. ನಾನು
ನಿಮ್ಮನ್ನು ಈಜಿಪ್ಟಿನಿಂದ ಹೊರಗೆ ನಡಿಸಿದಾಗ ಅರಣ್ಯದಲ್ಲಿ
ನಾನು ನಿಮಗೆ ಕೊಟ್ಟ ಈ ಆಹಾರವನ್ನು ನೋಡುವರು’’’
ಎಂದು ಹೇಳಿದನು.

33ಆದ್ದರಿಂದ ಮೋಶೆಯು ಆರೋನನಿಗೆ, ‘‘ಒಂದು
ಭರಣಿಯನ್ನು ತೆಗೆದುಕೊಂಡು ಅದರಲ್ಲಿ ಮೂರು ಸೇರಿ
ನಷ್ಟು ಮನ್ನವನ್ನು ತುಂಬಿಸು, ನಿಮ್ಮ ಮುಂದಿನ ಸಂತತಿ
ಯವರು ನೋಡುವುದಕೋಸ್ಕರ ಇದನ್ನು ಉಳಿಸಿ
ಯೆಹೋವನ ಮುಂದೆ ಇಡು. ಎಂದು ಹೇಳಿದನು.
34(ನಂತರ ಆರೋನನು ಯೆಹೋವನು ಮೋಶೆಗೆ
ಆಜ್ಞಾಪಿಸಿದಂತೆ ಮಾಡಿದನು. ಆರೋನನು ಮನ್ನದ
ಭರಣಿಯನ್ನು ಒಡಂಬಡಿಕೆಯ* ಮುಂದುಗಡೆಯಲ್ಲಿ
ಇಟ್ಟನು.) 35ನಲವತ್ತು ವರ್ಷಗಳವರೆಗೆ ಜನರು ಮನ್ನ
ವನ್ನು ತಿಂದರು. ಅವರು ವಿಶ್ರಾಂತಿಯ ದೇಶಕ್ಕೆ ಬರುವ
ತನಕ ಅಂದರೆ ಕಾನಾನಿನ ಗಡಿಗೆ ಬರುವವರೆಗೆ ಮನ್ನ
ವನ್ನು ತಿಂದರು. 36(ಅವರು ಮನ್ನವನ್ನು ಅಳೆಯುವುದಕ್ಕೆ
ಗೋಮೆರ್ ಎಂಬ ಅಳತೆಯನ್ನು ಉಪಯೋಗಿಸಿದರು.)

17 ಇಸ್ರೇಲರೆಲ್ಲರೂ ಸಿನ್ ಮರುಭೂಮಿಯಿಂದ
ಒಟ್ಟಾಗಿ ಪ್ರಯಾಣಮಾಡಿದರು. ಯೆಹೋವನು
ಆಜ್ಞಾಪಿಸಿದಂತೆಲ್ಲಾ ಅವರು ಸ್ಥಳದಿಂದ ಸ್ಥಳಕ್ಕೆ ಪ್ರಯಾಣ
ಮಾಡಿದರು. ಅವರು ರೆಫೀದೀಮಿಗೆ ಪ್ರಯಾಣ ಮಾಡಿ
ಅಲ್ಲಿ ತಂಗಿದರು. ಅವರಿಗೆ ಕುಡಿಯಲು ಅಲ್ಲಿ ನೀರಿರ
ಲಿಲ್ಲ. 2ಆದ್ದರಿಂದ ಅವರು ಮೋಶೆಗೆ ವಿರುದ್ಧವಾಗಿ ದಂಗೆ
ಎದ್ದು ಅವನೊಡನೆ ವಾಗ್ವಾದ ಮಾಡತೊಡಗಿದರು.
‘‘ನಮಗೆ ಕುಡಿಯಲು ನೀರು ಕೊಡು’’ ಎಂದು ಅವರು
ಕೇಳಿದರು.

ಮೋಶೆ ಅವರಿಗೆ, ‘‘ನೀವು ಯಾಕೆ ನನಗೆ ವಿರುದ್ಧವಾಗಿ
ದಂಗೆಯೆದ್ದಿರಿ? ನೀವು ಯಾಕೆ ಯೆಹೋವನನ್ನು
ಪರೀಕ್ಷಿಸುತ್ತಿದ್ದೀರಿ? ಯೆಹೋವನು ನಮ್ಮೊಡನೆ ಇಲ್ಲ
ವೆಂದು ನೀವು ಭಾವಿಸುತ್ತೀರೋ?’’ ಎಂದು ಹೇಳಿದನು.

3ಆದರೆ ಜನರು ನೀರಿಲ್ಲದೆ ಬಹಳ ಬಾಯಾರಿಕೆಗೆ
ಒಳಗಾಗಿದ್ದರು. ಆದ್ದರಿಂದ ಅವರು ಮೋಶೆಯ ಮೇಲೆ
ಗೊಣಗುಟ್ಟುತ್ತಿದ್ದರು. ‘‘ನೀನು ನಮ್ಮನ್ನು ಈಜಿಪ್ಟಿನಿಂದ
ಹೊರಗೆ ಕರೆದುಕೊಂಡು ಬಂದದ್ದೇಕೆ? ನಾವು, ನಮ್ಮ
ಮಕ್ಕಳು ಮತ್ತು ನಮ್ಮ ದನಕರುಗಳೆಲ್ಲಾ ನೀರಿಲ್ಲದೆ
ಸಾಯುವುದಕ್ಕೆ ನೀನು ನಮ್ಮನ್ನು ಇಲ್ಲಿಗೆ ಕರೆದುಕೊಂಡು
ಬಂದೆಯಾ?’’ ಎಂದು ಅವರು ಕೇಳಿದರು.

4ಆದ್ದರಿಂದ ಮೋಶೆಯು ಯೆಹೋವನಿಗೆ ಮೊರೆ
ಯಿಟ್ಟು ‘‘ಈ ಜನರ ವಿಷಯದಲ್ಲಿ ನಾನೇನು ಮಾಡಲಿ?
ಅವರು ಕಲ್ಲೆಸೆದು ನನ್ನನ್ನು ಕೊಲ್ಲುವುದಕ್ಕೆ ಸಿದ್ಧವಾಗಿ
ದ್ದಾರೆ’’ ಅಂದನು.

5ಯೆಹೋವನು ಮೋಶೆಗೆ, ‘‘ಇಸ್ರೇಲ್ ಜನರ ಮುಂದೆ
ಹೋಗು. ನಿನ್ನೊಡನೆ ಜನರ ಕೆಲವು ಹಿರಿಯ ರನ್ನು
ಕರೆದುಕೊ. ನಿನ್ನ ಊರುಗೋಲನ್ನು ಹಿಡಿದು ಕೊಂಡು
ಹೋಗು. ನೀನು ನೈಲ್ ನದಿಯನ್ನು ಹೊಡೆ ಯಲು
ಉಪಯೋಗಿಸಿದ ಕೋಲು ಇದಾಗಿದೆ. 6ಹೋರೇಬಿನಲ್ಲಿ
ನಾನು ನಿನ್ನ ಮುಂದೆ ಒಂದು ಬಂಡೆಯ ಮೇಲೆ
ನಿಲ್ಲುವೆನು. ಊರುಗೋಲಿನಿಂದ ಆ ಬಂಡೆ ಯನ್ನು
ಹೊಡೆ; ಆಗ ನೀರು ಅದರೊಳಗಿಂದ ಬರುವುದು. ಆಗ
ಜನರು ಕುಡಿಯಬಹುದು’’ ಎಂದು ಹೇಳಿದನು.

ಅಂತೆಯೇ ಮೋಶೆ ಮಾಡಿದನು. ಇಸ್ರೇಲರ ಹಿರಿ
ಯರು ಇದನ್ನು ನೋಡಿದರು. 7ಮೋಶೆ ಆ ಸ್ಥಳಕ್ಕೆ
ಮಸ್ಸಾ* ಮತ್ತು ಮೆರೀಬಾ* ಎಂದು ಹೆಸರಿಟ್ಟನು,
ಯಾಕಂದರೆ ಈ ಸ್ಥಳದಲ್ಲಿ ಇಸ್ರೇಲರು ಅವನಿಗೆ ವಿರುದ್ಧ
ವಾಗಿ ದಂಗೆ ಎದ್ದು ಯೆಹೋವನನ್ನು ಪರೀಕ್ಷಿಸಿದರು.
ಯೆಹೋವನು ಅವರೊಡನೆ ಇದ್ದಾನೋ ಇಲ್ಲವೋ
ಎಂದು ಜನರು ತಿಳಿಯಬಯಸಿದರು.

8ರೆಫೀದೀಮಿನಲ್ಲಿ ಅಮಾಲೇಕ್ಯರು ಬಂದು ಇಸ್ರೇಲ
ರಿಗೆ ವಿರುದ್ಧವಾಗಿ ಯುದ್ಧ ಮಾಡಿದರು.

---

**ಮನ್ನ** ‘‘ಏನದು’’ ಎಂದು ಅರ್ಥ ಕೊಡುವ ಇಬ್ರಿಯ ಪದಗಳಂತೆ ಈ ಪದದ ಇರುತ್ತದೆ.

**ಒಡಂಬಡಿಕೆ** ಅಕ್ಷರಶಃ ‘‘ಆಧಾರ’’ ಹತ್ತು ಆಜ್ಞೆಗಳು ಬರೆಯಲ್ಪಟ್ಟಿದ್ದ ಎರಡು ಕಲ್ಲಿನ ಹಲಗೆಗಳು. ದೇವರು ಮತ್ತು ಇಸ್ರೇಲರ ನಡುವೆ ಆದ ಒಡಂಬಡಿಕೆಗೆ ಪುರಾವೆಗಳಾಗಿದ್ದವು.

**ಮಸ್ಸಾ** ‘‘ದಂಗೆ ಏಳು’’ ಎಂಬುದು ಇದರರ್ಥ.

**ಮೆರೀಬಾ** ‘‘ವಿಚಾರಣೆ’’ ‘‘ಶೋಧನೆ’’ ಅಥವಾ ‘‘ಪರೀಕ್ಷೆ’’ ಎಂಬುದು ಇದರರ್ಥ.

9ಆದ್ದರಿಂದ ಮೋಶೆ ಯೆಹೋಶುವನಿಗೆ, ‘‘ಕೆಲವು
ಪುರುಷರನ್ನು ಆರಿಸಿಕೊಂಡು, ನಾಳೆ ಅಮಾಲೇಕ್ಯ
ರೊಡನೆ ಯುದ್ಧ ಮಾಡು. ನಾನು ಬೆಟ್ಟದ ತುದಿಯಲ್ಲಿ
ನಿಂತು ಗಮನಿಸುವೆನು, ದೇವರು ನನಗೆ ಕೊಟ್ಟ ಊರು
ಗೋಲನ್ನು ನಾನು ಹಿಡಿದುಕೊಂಡಿರುವೆನು’’ ಎಂದು
ಹೇಳಿದನು.

10ಯೆಹೋಶುವನು ಮೋಶೆಯ ಮಾತಿಗೆ ವಿಧೇಯ
ನಾಗಿ ಮರುದಿನ ಅಮಾಲೇಕ್ಯರೊಡನೆ ಯುದ್ಧಮಾಡಲು
ಹೋದನು. ಅದೇ ಸಮಯದಲ್ಲಿ ಮೋಶೆಯೂ
ಆರೋನನೂ ಹೂರನೂ ಬೆಟ್ಟದ ತುದಿಗೆ ಹೋದರು.
11ಮೋಶೆ ತನ್ನ ಕೈಗಳನ್ನು ಮೇಲೆತ್ತಿದಾಗ ಇಸ್ರೇಲರು
ಜಯಗಳಿಸಿದರು. ಆದರೆ ಮೋಶೆಯು ತನ್ನ ಕೈಗಳನ್ನು
ಕೆಳಗಿಳಿಸಿದಾಗ ಅಮಾಲೇಕ್ಯರು ಜಯಗಳಿಸಿದರು.

12ಸ್ವಲ್ಪ ಸಮಯದ ನಂತರ ಮೋಶೆಯ ತೋಳುಗಳು
ಆಯಾಸಗೊಂಡವು. ಆದ್ದರಿಂದ ಅವರು ಒಂದು ದೊಡ್ಡ
ಕಲ್ಲನ್ನು ಇಟ್ಟು ಮೋಶೆಯನ್ನು ಅದರ ಮೇಲೆ ಕುಳ್ಳಿರಿಸಿ
ದರು. ಬಳಿಕ ಆರೋನನು ಮತ್ತು ಹೂರನು ಮೋಶೆಯ
ಕೈಗಳನ್ನು ಮೇಲೆತ್ತಿ ಹಿಡಿದುಕೊಂಡರು. ಆರೋನನು
ಮೋಶೆಯ ಒಂದು ಕಡೆಯಲ್ಲಿದ್ದನು; ಹೂರನು
ಮೋಶೆಯ ಇನ್ನೊಂದು ಕಡೆಯಲ್ಲಿದ್ದನು. ಸೂರ್ಯನು
ಮುಳುಗುವವರೆಗೆ ಅವರು ಅವನ ಕೈಗಳನ್ನು ಮೇಲೆತ್ತಿ
ಹಿಡಿದರು. 13ಆದ್ದರಿಂದ ಯೆಹೋಶುವನು ಮತ್ತು ಅವನ
ಸೈನಿಕರು ಅಮಾಲೇಕ್ಯರನ್ನು ಯುದ್ಧದಲ್ಲಿ ಸೋಲಿಸಿದರು.

14ಬಳಿಕ ಯೆಹೋವನು ಮೋಶೆಗೆ, ‘‘ಈ ಯುದ್ಧದ
ಕುರಿತು ಬರೆ: ಜನರು ಇಲ್ಲಿ ನಡೆದದ್ದನ್ನು ಜ್ಞಾಪಿಸಿಕೊಳ್ಳು
ವಂತೆ ಈ ಸಂಗತಿಗಳನ್ನು ಒಂದು ಪುಸ್ತಕದಲ್ಲಿ ಬರೆದಿಡು.
ನಾನು ಅಮಾಲೇಕ್ಯರನ್ನು ಭೂಮಿಯ ಮೇಲಿಂದ
ಸಂಪೂರ್ಣವಾಗಿ ನಾಶಮಾಡುವೆನೆಂದು ಯೆಹೋಶುವ
ನಿಗೆ ಹೇಳಲು ಮರೆಯಬೇಡ’’ ಎಂದು ಹೇಳಿದನು.

15ಆಗ ಮೋಶೆಯು ಒಂದು ಯಜ್ಞವೇದಿಕೆಯನ್ನು ಕಟ್ಟಿ
ದನು. ಮೋಶೆಯು ಯಜ್ಞವೇದಿಕೆಗೆ, ‘‘ಯೆಹೋವನು
ನನ್ನ ಧ್ವಜ’’ ಎಂದು ಹೆಸರಿಟ್ಟನು. 16ಮೋಶೆ, ‘‘ನಾನು ನನ್ನ
ಕೈಗಳನ್ನು ಯೆಹೋವನ ಸಿಂಹಾಸನದ ಕಡೆಗೆ ಎತ್ತಿದೆನು.
ಆದ್ದರಿಂದ ಯೆಹೋವನು ಎಂದಿನಂತೆ ಅಮಾಲೇಕ್ಯರ
ವಿರುದ್ಧವಾಗಿ ಯುದ್ಧ ಮಾಡಿದನು’’ ಅಂದನು.

### ಮೋಶೆಯ ಮಾವನಿಂದ ಸಲಹೆ

18 ಮೋಶೆಯ ಮಾವನಾದ ಇತ್ರೋನನು
ಮಿದ್ಯಾನಿನಲ್ಲಿ ಯಾಜಕನಾಗಿದ್ದನು. ಮೋಶೆಗೆ
ಮತ್ತು ಇಸ್ರೇಲರಿಗೆ ದೇವರು ಅನೇಕ ರೀತಿಗಳಲ್ಲಿ
ಸಹಾಯ ಮಾಡಿದ್ದರ ಬಗ್ಗೆ, ಯೆಹೋವನು ಇಸ್ರೇಲರನ್ನು
ಈಜಿಪ್ಟಿನಿಂದ ಹೊರಗೆ ನಡಿಸಿದ್ದರ ಬಗ್ಗೆ ಇತ್ರೋನನು
ಕೇಳಿದನು. 2ಆದ್ದರಿಂದ ಅವನು ಮೋಶೆಯ ಹೆಂಡತಿ
ಯಾದ ಚಿಪ್ಪೋರಳನ್ನು ಕರೆದುಕೊಂಡು ಬಂದನು.
(ಚಿಪ್ಪೋರಳನ್ನು ಮೋಶೆಯು ಮನೆಗೆ ಕಳುಹಿಸಿದ್ದರಿಂದ
ಆಕೆಯು ಮೋಶೆ ಸಂಗಡ ಇರಲಿಲ್ಲ.) 3ಇತ್ರೋನನು
ಮೋಶೆಯ ಇಬ್ಬರು ಗಂಡು ಮಕ್ಕಳನ್ನೂ ಕರೆದುಕೊಂಡು
ಬಂದನು. ಮೊದಲಿನ ಮಗನ ಹೆಸರು ಗೇರ್ಷೋಮ್*
ಅವನು ಹುಟ್ಟಿದಾಗ ಮೋಶೆಯು, ‘‘ನಾನು ಪರದೇಶ
ದಲ್ಲಿ ಅಪರಿಚಿತನಾಗಿದ್ದೇನೆ’’ ಎಂದು ಹೇಳಿ ಆ ಹೆಸರನ್ನು
ಇಟ್ಟನು. 4ಇನ್ನೊಬ್ಬ ಮಗನ ಹೆಸರು ಎಲೀಯೆಜರ್.*
ಇವನು ಹುಟ್ಟಿದಾಗ ಮೋಶೆಯು, ‘‘ನನ್ನ ತಂದೆಯ
ದೇವರು ನನಗೆ ಸಹಾಯ ಮಾಡಿ ಈಜಿಪ್ಟಿನ ಅರಸನಿಂದ
ರಕ್ಷಿಸಿದನು’’ ಎಂದು ಹೇಳಿ ಆ ಹೆಸರನ್ನು ಇಟ್ಟನು. 5ಆದ್ದ
ರಿಂದ ಮೋಶೆಯು ಮರುಭೂಮಿಯಲ್ಲಿ ದೇವರ ಬೆಟ್ಟದ
ಬಳಿ (ಸಿನಾಯಿಬೆಟ್ಟ) ತಂಗಿದ್ದಾಗ ಇತ್ರೋನನು
ಮೋಶೆಯ ಬಳಿಗೆ ಹೋದನು. ಇತ್ರೋನನ ಜೊತೆಯಲ್ಲಿ
ಮೋಶೆಯ ಹೆಂಡತಿ ಮತ್ತು ಅವನ ಇಬ್ಬರು ಗಂಡು
ಮಕ್ಕಳು ಇದ್ದರು.

6ಇತ್ರೋನನು ಮೋಶೆಗೆ, ‘‘ನಾನು ನಿನ್ನ ಮಾವನಾದ
ಇತ್ರೋನ. ನಾನು ನಿನ್ನ ಹೆಂಡತಿಯನ್ನು ಮತ್ತು ಆಕೆಯ
ಇಬ್ಬರು ಗಂಡು ಮಕ್ಕಳನ್ನು ನಿನ್ನ ಬಳಿಗೆ ಕರೆದುಕೊಂಡು
ಬರುತ್ತಿದ್ದೇನೆ’’ ಎಂಬ ಸಂದೇಶವನ್ನು ಕಳುಹಿಸಿದನು.

7ಆದ್ದರಿಂದ ಮೋಶೆ ತನ್ನ ಮಾವನನ್ನು ಬೇಟಿಯಾಗಲು
ಹೊರಗೆ ಹೋದನು. ಮೋಶೆ ಅವನ ಮುಂದೆ ತಲೆಬಾಗಿ
ಅವನಿಗೆ ಮುದ್ದಿಟ್ಟನು. ಅವರಿಬ್ಬರು ಪರಸ್ಪರ ಕ್ಷೇಮ
ಸಮಾಚಾರವನ್ನು ವಿಚಾರಿಸಿಕೊಂಡರು. ಬಳಿಕ ಅವರು
ಹೆಚ್ಚು ಮಾತಾಡಲು ಮೋಶೆಯ ಡೇರೆಯೊಳಕ್ಕೆ
ಹೋದರು.

8ಯೆಹೋವನು ಇಸ್ರೇಲರಿಗೆ ಮಾಡಿದ ಪ್ರತಿ ಯೊಂದು
ಸಂಗತಿಯನ್ನು ಮೋಶೆ ಇತ್ರೋನನಿಗೆ ಹೇಳಿ ದನು.
ಯೆಹೋವನು ಫರೋಹನಿಗೆ ಮತ್ತು ಈಜಿಪ್ಟಿನ ವರಿಗೆ
ಮಾಡಿದ ಸಂಗತಿಗಳ ಬಗ್ಗೆ ಮೋಶೆಯು ಹೇಳಿದನು.
ದಾರಿಯ ಉದ್ದಕ್ಕೂ ತಮಗೆ ಬಂದೊದಗಿದ ಎಲ್ಲಾ ಸಮಸ್ಯೆ
ಗಳ ಬಗ್ಗೆ ಮತ್ತು ತೊಂದರೆ ಬಂದೊದಗಿದ ಪ್ರತಿಸಾರಿಯು
ಯೆಹೋವನು ಇಸ್ರೇಲರನ್ನು ಹೇಗೆ ರಕ್ಷಿಸಿದನೆಂಬುದನ್ನು
ಮೋಶೆಯು ತನ್ನ ಮಾವನಿಗೆ ತಿಳಿಸಿದನು.

9ಯೆಹೋವನು ಇಸ್ರೇಲರಿಗೆ ಮಾಡಿದ ಒಳ್ಳೆಯ ಸಂಗತಿ
ಗಳಿಗಾಗಿಯೂ ಈಜಿಪ್ಟಿನವರಿಂದ ಇಸ್ರೇಲರನ್ನು
ಯೆಹೋವನು ಬಿಡುಗಡೆಗೊಳಿಸಿದ್ದಕ್ಕಾಗಿಯೂ ಇತ್ರೋ
ನನು ಬಹಳ ಸಂತೋಷಪಟ್ಟನು. 10ಇತ್ರೋನನು,

---

**ಗೇರ್ಷೋಮ್** ಈ ಹೆಸರು, ‘‘ಅಲ್ಲಿ ಪರದೇಶಿ’’ ಎಂಬ ಅರ್ಥವನ್ನು ಕೊಡುವ ಇಬ್ರಿಯ ಪದಗಳಂತಿದೆ.

**ಎಲೀಯೆಜರ್** ಈ ಹೆಸರಿನ ಅರ್ಥ, ‘‘ನನ್ನ ದೇವರ ಸಹಾಯ.’’

‘‘ಯೆಹೋವನನ್ನು ಸ್ತುತಿಸಿರಿ! ಆತನು ನಿಮ್ಮನ್ನು ಫರೋಹ
ನಿಂದಲೂ ಈಜಿಪ್ಟಿನಿಂದಲೂ ರಕ್ಷಿಸಿದನು.
11ಈಜಿಪ್ಟಿನವರು ತಾವು ಇಸ್ರೇಲರಿಗಿಂತಲೂ ಉತ್ತಮ
ರೆಂದು ಭಾವಿಸಿಕೊಂಡಿದ್ದರು. ಆದರೆ ಯೆಹೋವನು
ಅವರನ್ನು ತಗ್ಗಿಸಿದ್ದರಿಂದ ಎಲ್ಲಾ ದೇವರುಗಳಲ್ಲಿ ಆತನೇ
ದೊಡ್ಡವನೆಂದು ಈಗ ನಾನು ತಿಳಿದುಕೊಂಡೆನು’’ ಎಂದು
ಹೇಳಿದನು.
12ಇತ್ರೋನನು ದೇವರಿಗೆ ಯಜ್ಞಗಳನ್ನು, ಕಾಣಿಕೆ
ಗಳನ್ನು ಕೊಟ್ಟನು. ಆಗ ಆರೋನನು ಮತ್ತು ಇಸ್ರೇಲರ
ಎಲ್ಲಾ ಹಿರಿಯರು ಮೋಶೆಯ ಮಾವನಾದ ಇತ್ರೋನ
ನೊಡನೆ ದೇವರ ಸನ್ನಿಧಿಯಲ್ಲಿ ಊಟಮಾಡಲು
ಬಂದರು.
13ಮರುದಿನ ಮೋಶೆಯು ಜನರಿಗೆ ನ್ಯಾಯನಿರ್ಣಯ
ಮಾಡಲು ತನ್ನ ಆಸನದ ಮೇಲೆ ಕುಳಿತುಕೊಂಡನು. ಅಲ್ಲಿ
ಬಹಳ ಜನರಿದ್ದರು, ಆದ್ದರಿಂದ ಅವರು ಮುಂಜಾನೆ
ಯಿಂದ ಸಾಯಂಕಾಲದವರೆಗೆ ಅವನ ಸುತ್ತಲೂ ನಿಂತು
ಕೊಂಡಿದ್ದರು.
14ಮೋಶೆಯು ಜನರ ನ್ಯಾಯತೀರಿಸುವುದನ್ನು
ಇತ್ರೋನನು ನೋಡಿ, ‘‘ನೀನು ಯಾಕೆ ಹೀಗೆ ಮಾಡುತ್ತಿ
ರುವೆ? ನೀನೊಬ್ಬನೇ ಯಾಕೆ ನ್ಯಾಯತೀರಿಸಬೇಕು?
ಜನರು ದಿನವೆಲ್ಲಾ ನಿನ್ನ ಬಳಿಗೆ ಯಾಕೆ ಬರಬೇಕು?’’
ಎಂದು ಕೇಳಿದನು. 15ಆಗ ಮೋಶೆ ತನ್ನ ಮಾವನಿಗೆ,
‘‘ಜನರು ನನ್ನ ಬಳಿಗೆ ಬಂದು ದೇವರ ತೀರ್ಮಾನವನ್ನು
ಕೇಳಬಯಸುತ್ತಾರೆ. 16ಅವರೊಳಗೆ ವ್ಯಾಜ್ಯವಿದ್ದರೆ
ಅವರು ನನ್ನ ಬಳಿಗೆ ಬರುತ್ತಾರೆ. ಯಾವನು ನ್ಯಾಯವಂತ
ನೆಂದು ನಾನು ತೀರ್ಮಾನಿಸುತ್ತೇನೆ. ಈ ರೀತಿಯಾಗಿ
ನಾನು ದೇವರ ಕಟ್ಟಳೆಗಳನ್ನು ಮತ್ತು ಬೋಧನೆಗಳನ್ನು
ಜನರಿಗೆ ಬೋಧಿಸುತ್ತೇನೆ’’ ಅಂದನು.
17ಆದರೆ ಮೋಶೆಯ ಮಾವನು ಅವನಿಗೆ, ‘‘ನೀನು
ಹೀಗೆ ಮಾಡುತ್ತಿರುವುದು ಒಳ್ಳೆಯದಲ್ಲ. 18ಈ ಕೆಲಸ
ನೀನೊಬ್ಬನೇ ಮಾಡುವುದು ಬಹಳ ಪ್ರಯಾಸಕರ. ಇದು
ನಿನ್ನನ್ನು ಆಯಾಸಗೊಳಿಸುತ್ತದೆ; ಜನರನ್ನೂ ಆಯಾಸ
ಗೊಳಿಸುತ್ತದೆ. ನಿನ್ನೊಬ್ಬನಿಂದಲೇ ಈ ಕೆಲಸವನ್ನು ಮಾಡ
ಲಾಗದು. 19ಕೇಳು, ನಾನು ನಿನಗೆ ಕೆಲವು ಸಲಹೆಗಳನ್ನು
ಕೊಡುವೆನು. ಯೆಹೋವನು ನಿನ್ನೊಡನೆ ಇರಲಿ ಎಂದು
ನಾನು ಪ್ರಾರ್ಥಿಸುತ್ತೇನೆ. ನೀನು ಮಾಡಬೇಕಾದದ್ದು
ಇವೇ: ಜನರ ವ್ಯಾಜ್ಯಗಳನ್ನು ನೀನು ಕೇಳುವುದನ್ನು
ಮುಂದುವರಿಸಬೇಕು; ಈ ಸಂಗತಿಗಳ ಬಗ್ಗೆ ನೀನು ದೇವ
ರೊಂದಿಗೆ ಮಾತಾಡುವುದನ್ನೂ ಮುಂದುವರಿಸಬೇಕು;
20ನೀನು ದೇವರ ಕಟ್ಟಳೆಗಳನ್ನು ಮತ್ತು ಬೋಧನೆಗಳನ್ನು
ಜನರಿಗೆ ಬೋಧಿಸಬೇಕು; ನಿಂಬಂಧನೆಗಳನ್ನು ಉಲ್ಲಂಘಿ
ಸದಂತೆ ಅವರನ್ನು ಎಚ್ಚರಿಸಬೇಕು; ಜೀವಿಸಲು ಸರಿಯಾದ
ಮಾರ್ಗವನ್ನು ಅವರಿಗೆ ಬೋಧಿಸಬೇಕು; ಅವರು ಮಾಡ
ಬೇಕಾದದ್ದನ್ನು ಅವರಿಗೆ ತಿಳಿಸಬೇಕು. 21ಆದರೆ ನೀನು
ಜನರೊಳಗೆ ದೇವಭಕ್ತರೂ ಲಂಚಮುಟ್ಟದವರೂ ಆಗಿ
ರುವವರನ್ನು ಆರಿಸಿಕೊಳ್ಳಬೇಕು. ಅವರನ್ನು ಸಾವಿರ
ಜನರ ಮೇಲೆಯೂ ನೂರು ಜನರ ಮೇಲೆಯೂ ಐವತ್ತು
ಜನರ ಮೇಲೆಯೂ ಹತ್ತು ಜನರ ಮೇಲೆಯೂ ಅಧಿಕಾರಿ
ಗಳನ್ನಾಗಿ ನೇಮಿಸಬೇಕು. 22ಈ ಅಧಿಕಾರಿಗಳು ಜನರಿಗೆ
ನ್ಯಾಯತೀರಿಸಲಿ. ಬಹಳ ಪ್ರಾಮುಖ್ಯವಾದ ವ್ಯಾಜ್ಯವಿ
ದ್ದರೆ, ತೀರ್ಮಾನಕ್ಕಾಗಿ ಅವರು ನಿನ್ನ ಬಳಿಗೆ ಬರಬಹುದು.
ಆದರೆ ಇತರ ವ್ಯಾಜ್ಯಗಳನ್ನು ಅವರೇ ತೀರ್ಮಾನಿಸಿ ಕೊಳ್ಳ
ಬಹುದು. ಈ ರೀತಿಯಾಗಿ ಮಾಡಿದರೆ, ಅದು ನಿನಗೆ
ಸುಲಭವಾಗುವುದು. ಮಾತ್ರವಲ್ಲದೆ, ಈ ಜನರು ನಿನ್ನ
ಕೆಲಸವನ್ನು ತಮ್ಮೊಳಗೆ ಹಂಚಿಕೊಳ್ಳುವರು. 23ನೀನು ಈ
ಸಂಗತಿಗಳನ್ನು ಮಾಡಿದರೆ, ಯೆಹೋವನ ಚಿತ್ತವಿದ್ದರೆ,
ನೀನು ನಿನ್ನ ಕೆಲಸವನ್ನು ಮಾಡುತ್ತಾ ಮುಂದುವರಿಯಲು
ಶಕ್ತನಾಗುವೆ ಮತ್ತು ಅದೇ ಸಮಯದಲ್ಲಿ ಜನರೆಲ್ಲರೂ
ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಂಡು ಮನೆಗೆ ಹೋಗ
ಬಹುದು’’ ಎಂದು ಹೇಳಿದನು.
24ಮೋಶೆಯು ತನ್ನ ಮಾವನಾದ ಇತ್ರೋನನು ಹೇಳಿ
ದಂತೆ ಮಾಡಿದನು. 25ಮೋಶೆಯು ಇಸ್ರೇಲರೊಳಗಿಂದ
ನೀತಿವಂತರನ್ನು ಆರಿಸಿಕೊಂಡು ಅವರನ್ನು ಹೀಗೆ ಸಾವಿರ
ಜನರ ಮೇಲೆಯೂ ನೂರು ಜನರ ಮೇಲೆಯೂ ಐವತ್ತು
ಜನರ ಮೇಲೆಯೂ ಹತ್ತು ಜನರ ಮೇಲೆಯೂ ಅಧಿಕಾರಿ
ಗಳನ್ನಾಗಿ ಮಾಡಿದನು. 26ಈ ಅಧಿಕಾರಿಗಳು ಜನರ
ನ್ಯಾಯಾಧಿಪತಿಗಳಾಗಿದ್ದರು. ಜನರು ತಮ್ಮ ವ್ಯಾಜ್ಯಗಳನ್ನು
ಈ ಅಧಿಕಾರಿಗಳ ಬಳಿಗೆ ಯಾವಾಗಲೂ ತರಬಹು
ದಾಗಿತ್ತು. ಮೋಶೆಯು ಬಹು ಪ್ರಾಮುಖ್ಯವಾದ ವ್ಯಾಜ್ಯ
ಗಳನ್ನು ಮಾತ್ರ ತೀರ್ಮಾನಿಸುತ್ತಿದ್ದನು.
27ಸ್ವಲ್ಪ ಸಮಯದ ನಂತರ ಮೋಶೆಯು ತನ್ನ ಮಾವ
ನಾದ ಇತ್ರೋನನನ್ನು ಬೀಳ್ಕೊಟ್ಟನು; ಇತ್ರೋನನು ತನ್ನ
ಸ್ವಂತ ದೇಶಕ್ಕೆ ಹಿಂತಿರುಗಿಹೋದನು.

### ಇಸ್ರೇಲರ ಜೊತೆ ದೇವರ ಒಡಂಬಡಿಕೆ

19 ಇಸ್ರೇಲರು ಈಜಿಪ್ಟಿನಿಂದ ಹೊರಟ ಮೂರ
ನೆಯ ತಿಂಗಳಲ್ಲಿ ಸೀನಾಯಿ ಮರುಭೂಮಿ
ಯನ್ನು ತಲುಪಿದರು. 2ಜನರು ರೆಫೀದೀಮನ್ನು
ಸೀನಾಯಿ ಬಿಟ್ಟು ಮರುಭೂಮಿಗೆ ಬಂದಿದ್ದರು. ಇಸ್ರೇ
ಲರು ಮರುಭೂಮಿಯಲ್ಲಿ ಬೆಟ್ಟದ ಬಳಿ ತಂಗಿದರು. 3ಆಗ
ಮೋಶೆ ಬೆಟ್ಟವನ್ನೇರಿ ಯೆಹೋವನ ಸನ್ನಿಧಿಗೆ ಹೋದನು.
ಮೋಶೆಯು ಬೆಟ್ಟದ ಮೇಲೆ ಇದ್ದಾಗ ಯೆಹೋವನು
ಅವನಿಗೆ, ‘‘ಯಾಕೋಬನ ಮಹಾ ಕುಟುಂಬವಾದ
ಇಸ್ರೇಲರಿಗೆ ಈ ಸಂಗತಿಗಳನ್ನು ಹೇಳು. 4‘ನಾನು ನನ್ನ

ವೈರಿಗಳಿಗೆ ಮಾಡುವ ಸಂಗತಿಗಳನ್ನು ನೀವು ನೋಡಿದ್ದೀರಿ.
ನಾನು ಈಜಿಪ್ಟಿನವರಿಗೆ ಏನು ಮಾಡಿದೆನೆಂದು ನೀವು
ನೋಡಿದಿರಿ. ಹದ್ದು ತನ್ನ ಮರಿಗಳನ್ನು ಹೊತ್ತುಕೊಂಡು
ಬರುವಂತೆ ನಾನು ನಿಮ್ಮನ್ನು ಈಜಿಪ್ಟಿನಿಂದ ಇಲ್ಲಿಗೆ
ಕರೆದುಕೊಂಡು ಬಂದದ್ದನ್ನು ನೀವು ನೋಡಿದಿರಿ.
5ಆದ್ದರಿಂದ ನನ್ನ ಆಜ್ಞೆಗಳಿಗೆ ವಿಧೇಯರಾಗಬೇಕೆಂದು
ನಾನು ನಿಮಗೆ ಹೇಳುತ್ತೇನೆ. ನನ್ನ ಒಡಂಬಡಿಕೆಯನ್ನು
ಕೈಕೊಂಡು ನಡೆಯಿರಿ. ಆಗ ನೀವು ನನಗೆ ವಿಶೇಷವಾದ
ಜನರಾಗುವಿರಿ. ಈ ಲೋಕವೆಲ್ಲಾ ನನ್ನದೇ. ಆದರೆ ನಾನು
ನಿಮ್ಮನ್ನು ನನ್ನ ಸ್ವಂತ ಜನಾಂಗವನ್ನಾಗಿ ಆರಿಸಿಕೊಳ್ಳು
ತ್ತಿದ್ದೇನೆ. 6ನೀವು 'ಯಾಜಕರ ರಾಜ್ಯ' ಎಂಬ ವಿಶೇಷವಾದ
ಜನಾಂಗವಾಗುವಿರಿ. ಮೋಶೆಯೇ, ನಾನು ನಿನಗೆ ಹೇಳಿದ
ಸಂಗತಿಗಳನ್ನು ನೀನು ಇಸ್ರೇಲರಿಗೆ ಹೇಳಲೇಬೇಕು'''
ಎಂದನು.

7ಆದ್ದರಿಂದ ಮೋಶೆ ಬೆಟ್ಟದಿಂದಿಳಿದು ಬಂದು ಜನರ
ಹಿರಿಯರನ್ನು ಒಟ್ಟಾಗಿ ಕರೆಸಿದನು. ಯೆಹೋವನು ಹೇಳ
ಬೇಕೆಂದು ಆಜ್ಞಾಪಿಸಿದ ಸಂಗತಿಗಳನ್ನೆಲ್ಲಾ ಮೋಶೆಯು
ಹಿರಿಯರಿಗೆ ಹೇಳಿದನು. 8ಜನರೆಲ್ಲರೂ ಒಟ್ಟಾಗಿ ಮಾತಾ
ಡಿದರು. ''ಯೆಹೋವನು ಹೇಳುವ ಪ್ರತಿಯೊಂದಕ್ಕೂ
ನಾವು ವಿಧೇಯರಾಗುವೆವು'' ಎಂದು ಅವರು ಅರಿಕೆ
ಮಾಡಿದರು.

ಬಳಿಕ ಮೋಶೆಯು ತಿರುಗಿ ಬೆಟ್ಟವನ್ನೇರಿ ಯೆಹೋವನ
ಸನ್ನಿಧಿಗೆ ಹೋಗಿ ಜನರ ಪ್ರತಿಕ್ರಿಯೆಯನ್ನು ದೇವರಿಗೆ ತಿಳಿ
ಸಿದನು. 9ಯೆಹೋವನು ಮೋಶೆಗೆ, ''ನಾನು ಕಾರ್ಮುಗಿ
ಲಲ್ಲಿ ನಿನ್ನ ಬಳಿಗೆ ಬರುವೆನು. ನಾನು ನಿನ್ನೊಡನೆ ಮಾತಾ
ಡುವೆನು. ನಿನ್ನೊಡನೆ ಮಾತಾಡುವುದನ್ನು ಜನರೆಲ್ಲರೂ
ಕೇಳುವರು. ನೀನು ಹೇಳುವ ಸಂಗತಿಗಳನ್ನು ಜನರು
ಯಾವಾಗಲೂ ನಂಬಲು ಸಹಾಯವಾಗುವಂತೆ ನಾನು
ಇದನ್ನು ಮಾಡುವೆನು'' ಎಂದು ಹೇಳಿದನು.

ಆಗ ಮೋಶೆಯು ಜನರು ಹೇಳಿದ ಸಂಗತಿಗಳನ್ನೆಲ್ಲಾ
ದೇವರಿಗೆ ಅರಿಕೆ ಮಾಡಿದನು.

10ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, ''ಈ
ದಿನ ಮತ್ತು ನಾಳೆ ನೀನು ಜನರನ್ನು ಒಂದು ವಿಶೇಷ
ಸಂದರ್ಶನಕ್ಕಾಗಿ ಸಿದ್ಧಪಡಿಸಬೇಕು. ಜನರು ತಮ್ಮ ಬಟ್ಟೆ
ಗಳನ್ನು ತೊಳೆದುಕೊಂಡು 11ಮೂರನೆಯ ದಿನದಲ್ಲಿ ನನ
ಗಾಗಿ ಸಿದ್ಧರಾಗಬೇಕು. ಮೂರನೆಯ ದಿನದಲ್ಲಿ ನಾನು
ಸೀನಾಯಿ ಬೆಟ್ಟದ ಮೇಲೆ ಇಳಿದುಬರುವೆನು; ಜನ
ರೆಲ್ಲರೂ ನನ್ನನ್ನು ನೋಡುವರು. 12-13ಆದರೆ ಬೆಟ್ಟದಿಂದ
ದೂರವಿರಬೇಕೆಂದು ನೀನು ಜನರಿಗೆ ಹೇಳಬೇಕು.
ಒಂದು ಗೆರೆಯನ್ನು ಹಾಕಿ ಆ ಗೆರೆಯನ್ನು ದಾಟಬಾರ
ದೆಂದು ಅವರಿಗೆ ತಿಳಿಸು. ಯಾವ ವ್ಯಕ್ತಿಯಾಗಲೀ ಬೆಟ್ಟ
ವನ್ನು ಮುಟ್ಟಿದರೆ ಅವನನ್ನು ಕಲ್ಲುಗಳಿಂದಾಗಲೀ ಬಾಣಗ
ಳಿಂದಾಗಲೀ ಕೊಲ್ಲಬೇಕು. ಯಾವ ಪ್ರಾಣಿಯಾದರೂ
ಬೆಟ್ಟವನ್ನು ಮುಟ್ಟಿದರೆ ಅದನ್ನು ಕೊಲ್ಲಬೇಕು. ಯಾರೂ
ಬೆಟ್ಟವನ್ನು ಮುಟ್ಟಕೂಡದು. ತುತ್ತೂರಿ ಊದಿದಾಗ
(ಟಗರಿನ ಕೊಂಬಿನಿಂದ ಮಾಡಿದ ತುತ್ತೂರಿ) ಜನರು
ಬೆಟ್ಟದ ಸಮೀಪಕ್ಕೆ ಬರಬೇಕು ಎಂದು ಹೇಳು'' ಎಂದನು.

14ಮೋಶೆ ಬೆಟ್ಟದಿಂದಿಳಿದು ಹೋದನು. ಅವನು ಜನರ
ಬಳಿಗೆ ಹೋಗಿ ವಿಶೇಷ ಸಂದರ್ಶನಕ್ಕಾಗಿ ಅವರನ್ನು ಸಿದ್ಧ
ಮಾಡಿದನು. ಜನರು ತಮ್ಮ ಬಟ್ಟೆಗಳನ್ನು ತೊಳೆದು
ಕೊಂಡರು.

15ಆಗ ಮೋಶೆ ಜನರಿಗೆ, ''ಇನ್ನು ಮೂರು ದಿನಗಳಲ್ಲಿ
ಅಂದರೆ ಮೂರನೆಯ ದಿನದಲ್ಲಿ ಯೆಹೋವನೊಡನೆ
ಒಂದು ವಿಶೇಷ ಸಂದರ್ಶನಕ್ಕಾಗಿ ಸಿದ್ಧರಾಗಿರಿ. ಅಲ್ಲಿಯ
ವರೆಗೆ, ಪುರುಷರು ಸ್ತ್ರೀಯರ ಸಂಗ ಮಾಡಬಾರದು''
ಎಂದು ಹೇಳಿದನು.

16ಮೂರನೆಯ ದಿನದ ಮುಂಜಾನೆಯಲ್ಲಿ ಬೆಟ್ಟದಲ್ಲಿ
ಗುಡುಗುಮಿಂಚುಗಳು ಉಂಟಾದವು. ಒಂದು ಕಾರ್ಮು
ಗಿಲು ಬೆಟ್ಟದ ಮೇಲೆ ಇಳಿದುಬಂತು; ತುತ್ತೂರಿಯ ಮಹಾ
ಧ್ವನಿಯು ಕೇಳಿಸಿತು. ಪಾಳೆಯದಲ್ಲಿದ್ದ ಜನರೆಲ್ಲರೂ
ಭಯಭೀತರಾದರು. 17ಆಗ ಮೋಶೆ ದೇವರನ್ನು ಸಂಧಿಸು
ವುದಕ್ಕಾಗಿ ಜನರನ್ನು ಪಾಳೆಯದಿಂದ ಹೊರಗೆ ನಡಿಸಿ,
ಬೆಟ್ಟದ ಬಳಿಗೆ ಕರೆದುಕೊಂಡು ಬಂದನು. 18ಸೀನಾಯಿ
ಬೆಟ್ಟವು ಹೊಗೆಯಿಂದ ಕವಿದುಕೊಂಡಿತು. ಕುಲುಮೆ
ಯಿಂದ ಬರುವ ಹೊಗೆಯಂತೆ, ಬೆಟ್ಟದಿಂದ ಹೊಗೆಯು
ಮೇಲಕ್ಕೇರಿತು. ಯೆಹೋವನು ಬೆಂಕಿಯಲ್ಲಿ ಬೆಟ್ಟದ
ಮೇಲೆ ಇಳಿದು ಬಂದದ್ದರಿಂದ ಇದು ಸಂಭವಿಸಿತು. ಇಡೀ
ಬೆಟ್ಟ ನಡುಗಲಾರಂಭಿಸಿತು. 19ತುತ್ತೂರಿಯ ಧ್ವನಿ ಹೆಚ್ಚು
ಹೆಚ್ಚಾಯಿತು. ಮೋಶೆಯು ದೇವರೊಂದಿಗೆ ಮಾತಾಡಿ
ದಾಗಲೆಲ್ಲಾ ದೇವರು ಗುಡುಗಿನಂತಿದ್ದ ಧ್ವನಿಯಲ್ಲಿ
ಅವನಿಗೆ ಉತ್ತರಕೊಟ್ಟನು.

20ಯೆಹೋವನು ಸೀನಾಯಿ ಬೆಟ್ಟಕ್ಕೆ ಇಳಿದು ಬಂದನು.
ಬಳಿಕ ಯೆಹೋವನು ಮೋಶೆಯನ್ನು ಕರೆದು ಬೆಟ್ಟದ
ತುದಿಗೆ ಬರಲು ಹೇಳಿದನು. ಆದ್ದರಿಂದ ಮೋಶೆ ಮೇಲಕ್ಕೆ
ಹೋದನು.

21ಯೆಹೋವನು ಮೋಶೆಗೆ, ''ಕೆಳಗಿಳಿದು ಹೋಗಿ,
ಜನರು ನನ್ನನ್ನು ನೋಡಲು ನನ್ನ ಹತ್ತಿರ ಬರಬಾರದೆಂದು
ಅವರನ್ನು ಎಚ್ಚರಿಸು. ಇಲ್ಲವಾದರೆ ಅವರಲ್ಲಿ ಅನೇಕರು
ಸಾಯುವರು. 22ಮಾತ್ರವಲ್ಲದೆ ನನ್ನ ಸಮೀಪಕ್ಕೆ ಬರುವ
ಯಾಜಕರು ಈ ವಿಶೇಷ ಸಂದರ್ಶನಕ್ಕಾಗಿ ತಮ್ಮನ್ನು ಸಿದ್ಧ
ಪಡಿಸಿಕೊಳ್ಳಬೇಕೆಂದು ಹೇಳು. ಇಲ್ಲವಾದರೆ ನಾನು
ಅವರನ್ನೂ ಶಿಕ್ಷಿಸುವೆನು'' ಅಂದನು.

23ಮೋಶೆಯು ಯೆಹೋವನಿಗೆ, ''ಜನರು ಬೆಟ್ಟವ
ನ್ನೇರಿ ಬರಲಾರರು. ಬೆಟ್ಟದ ಸುತ್ತಲೂ ಮೇರೆಯನ್ನು

ಹಾಕಿ ಅದನ್ನು ಪವಿತ್ರ ಸ್ಥಳವನ್ನಾಗಿ ಪ್ರತ್ಯೇಕಿಸಬೇಕೆಂದು
ನೀನೇ ನಮಗೆ ಎಚ್ಚರಿಕೆ ನೀಡಿದೆಯಲ್ಲಾ!'' ಎಂದು
ಹೇಳಿದನು.

24ಯೆಹೋವನು ಅವನಿಗೆ, ''ಜನರ ಬಳಿಗೆ ಇಳಿದು
ಹೋಗಿ ಆರೋನನನ್ನು ಕರೆದುಕೊಂಡು ಬಾ. ಆದರೆ
ಯಾಜಕರಾಗಲೀ ಜನರಾಗಲೀ ಬರಕೂಡದು. ಅವರು
ನನ್ನ ಸಮೀಪಕ್ಕೆ ಬಂದರೆ, ನಾನು ಅವರನ್ನು ದಂಡಿಸು
ವೆನು'' ಎಂದು ಹೇಳಿದನು.

25ಆದ್ದರಿಂದ ಮೋಶೆ ಜನರ ಬಳಿಗೆ ಇಳಿದುಹೋಗಿ
ಈ ಸಂಗತಿಗಳನ್ನು ಅವರಿಗೆ ತಿಳಿಸಿದನು.

## ದಶಾಜ್ಞೆಗಳು

20 ಬಳಿಕ ಯೆಹೋವನು ಈ ದಶಾಜ್ಞೆಗಳನ್ನು ಅವ
ರಿಗೆ ಕೊಟ್ಟನು: 2''ಯೆಹೋವನೆಂಬ ನಾನೇ
ನಿಮ್ಮ ದೇವರು. ಈಜಿಪ್ಟಿನಲ್ಲಿ ಗುಲಾಮರಾಗಿದ್ದ ನಿಮ್ಮನ್ನು
ಆ ದೇಶದಿಂದ ಹೊರಗೆ ನಡಿಸಿದವನು ನಾನೇ.

3''ನನ್ನನ್ನಲ್ಲದೆ ಬೇರೆ ಯಾವ ದೇವರುಗಳನ್ನೂ ನೀವು
ಆರಾಧಿಸಬಾರದು,

4''ನೀವು ಯಾವ ವಿಗ್ರಹಗಳನ್ನು ಮಾಡಬಾರದು.
ಆಕಾಶದಲ್ಲಿಯಾಗಲೀ ಭೂಮಿಯ ಮೇಲಾಗಲೀ ನೀರಿ
ನಲ್ಲಾಗಲೀ ಇರುವ ಯಾವುದೇ ವಸ್ತುವಿನ ರೂಪವನ್ನು
ನೀವು ಮಾಡಿಕೊಳ್ಳಬಾರದು. ಅವುಗಳನ್ನು ಪೂಜಿಸ
ಬಾರದು. 5ನಿಮ್ಮ ದೇವರಾದ ಯೆಹೋವನೆಂಬ ನನಗೆ
ಸಲ್ಲತಕ್ಕ ಗೌರವವನ್ನು ನೀವು ಬೇರೆಯವರಿಗೆ ಸಲ್ಲಿಸಿದರೆ
ನಾನು ನಿಮ್ಮನ್ನು ದ್ವೇಷಿಸುತ್ತೇನೆ. ನನಗೆ ವಿರುದ್ಧವಾಗಿ
ಪಾಪಮಾಡುವವರ ದೋಷಫಲವನ್ನು ಅವರ ಮೂರು
ನಾಲ್ಕು ತಲೆಮಾರುಗಳವರೆಗೂ ಬರಮಾಡುವೆನು.
6ಆದರೆ ನನ್ನ ಆಜ್ಞೆಗಳಿಗೆ ವಿಧೇಯರಾಗಿರುವವರಿಗೆ ಅವರ
ಸಾವಿರ ತಲೆಮಾರುಗಳವರೆಗೂ ದಯೆತೋರಿಸುವೆನು.

7''ನಿಮ್ಮ ದೇವರಾದ ಯೆಹೋವನ ಹೆಸರನ್ನು
ಅಯೋಗ್ಯಕಾರ್ಯಕ್ಕಾಗಿ ಎತ್ತಬಾರದು. ಯೆಹೋವನು
ತನ್ನ ಹೆಸರನ್ನು ಅಯೋಗ್ಯಕ್ಕಾಗಿ ಎತ್ತುವವನನ್ನು ಶಿಕ್ಷಿಸದೆ
ಬಿಡುವುದಿಲ್ಲ.

8''ನೀವು ಸಬ್ಬತ್ ದಿನವನ್ನು ದೇವರ ದಿನವೆಂದು
ಜ್ಞಾಪಕದಲ್ಲಿಟ್ಟುಕೊಂಡು ಅದನ್ನು ಆಚರಿಸಿರಿ. 9ವಾರದ
ಆರು ದಿನಗಳಲ್ಲಿ ಕೆಲಸಮಾಡಿರಿ. 10ಆದರೆ ಏಳನೆ ದಿನವು
ನಿಮ್ಮ ದೇವರಾದ ಯೆಹೋವನನ್ನು ಸನ್ಮಾನಿಸಲು ಮೀಸ
ಲಾಗಿರುವ ವಿಶ್ರಾಂತಿ ದಿನವಾಗಿದೆ. ಅಂದು ನೀವು ಯಾವ
ಕೆಲಸವನ್ನೂ ಮಾಡಬಾರದು. ನೀವಾಗಲೀ ನಿಮ್ಮ ಗಂಡು
ಮಕ್ಕಳಾಗಲೀ ಹೆಣ್ಣುಮಕ್ಕಳಾಗಲೀ ಸೇವಕರಾಗಲೀ
ಸೇವಕಿಯರಾಗಲೀ ನಿಮ್ಮ ಪಶುಗಳಾಗಲೀ ನಿಮ್ಮಲ್ಲಿರುವ
ವಿದೇಶಿಯರಾಗಲೀ ಕೆಲಸ ಮಾಡಬಾರದು.
11ಯಾಕಂದರೆ ಯೆಹೋವನು ಆರು ದಿನಗಳಲ್ಲಿ ಕೆಲಸ
ಮಾಡಿ ಭೂಮ್ಯಾಕಾಶಗಳನ್ನೂ ಸಮುದ್ರವನ್ನೂ ಅವುಗಳ
ಲ್ಲಿರುವ ಸಮಸ್ತವನ್ನು ನಿರ್ಮಿಸಿ ಏಳನೆಯ ದಿನದಲ್ಲಿ
ವಿಶ್ರಮಿಸಿದನು. ಆದ್ದರಿಂದ ಯೆಹೋವನು ಸಬ್ಬತ್
ದಿನವನ್ನು ಆಶೀರ್ವದಿಸಿ ಅದನ್ನು ತನ್ನ ದಿನವನ್ನಾಗಿ
ಮಾಡಿದನು.

12''ನೀವು ನಿಮ್ಮ ತಂದೆತಾಯಿಗಳನ್ನು ಸನ್ಮಾನಿಸಬೇಕು;
ನೀವು ಸನ್ಮಾನಿಸಿದರೆ, ನಿಮ್ಮ ದೇವರಾದ ಯೆಹೋವನು
ನಿಮಗೆ ಕೊಡುವ ದೇಶದಲ್ಲಿ ಬಹುಕಾಲ ಬಾಳುವಿರಿ.

13''ನೀವು ಯಾರನ್ನೂ ಕೊಲೆ ಮಾಡಬಾರದು.

14''ನೀವು ವ್ಯಭಿಚಾರ ಮಾಡಬಾರದು.

15''ನೀವು ಕದಿಯಬಾರದು.

16''ನೀವು ಬೇರೆಯವರ ಮೇಲೆ ಸುಳ್ಳುಸಾಕ್ಷಿ ಹೇಳ
ಬಾರದು.* 17''ನೀವು ನೆರೆಯವನ ಮನೆಯನ್ನು ಆಶಿಸ
ಬಾರದು. ನೀವು ಮತ್ತೊಬ್ಬನ ಹೆಂಡತಿಯನ್ನಾಗಲೀ
ಸೇವಕರನ್ನಾಗಲೀ ದಾಸಿಯರನ್ನಾಗಲೀ ಪಶುಗಳ
ನ್ನಾಗಲೀ ಆಶಿಸ ಬಾರದು.

## ಜನರು ದೇವರಿಗೆ ಭಯಪಟ್ಟಿದ್ದು

18ಆಗ ಅಲ್ಲಿದ್ದ ಜನರು ಗುಡುಗಿನ ಧ್ವನಿಯನ್ನು ಕೇಳಿ
ದರು; ಬೆಟ್ಟದ ಮೇಲೆ ಮಿಂಚುಗಳನ್ನು ನೋಡಿದರು;
ಹೊಗೆಯು ಬೆಟ್ಟದಿಂದ ಏರುವುದನ್ನು ಕಂಡರು. ಅವ
ರೆಲ್ಲರೂ ಭಯದಿಂದ ನಡುಗಿದರು; ಬೆಟ್ಟದಿಂದ ದೂರ
ದಲ್ಲಿದ್ದುಕೊಂಡು ಅವುಗಳನ್ನೆಲ್ಲಾ ಗಮನಿಸಿದರು. 19ಆಗ
ಜನರು ಮೋಶೆಗೆ, ''ನೀನು ನಮ್ಮೊಡನೆ ಮಾತಾಡು;
ನಾವು ನಿನಗೆ ಕಿವಿಗೊಡುವೆವು. ಆದರೆ ಯೆಹೋವನು
ನಮ್ಮೊಡನೆ ಮಾತಾಡದಿರಲಿ. ಇಲ್ಲವಾದರೆ ನಾವು
ಸಾಯುವೆವು'' ಅಂದರು.

20ಆಗ ಮೋಶೆಯು ಜನರಿಗೆ, ''ಭಯಪಡಬೇಡಿರಿ,
ಯೆಹೋವನು ನಿಮ್ಮನ್ನು ಪರೀಕ್ಷಿಸಲು ಬಂದಿದ್ದಾನೆ.
ನೀವು ಆತನಲ್ಲಿ ಭಕ್ತಿಯುಳ್ಳವರಾಗಿರಬೇಕೆಂದು ಆತನು
ಬಯಸುತ್ತಾನೆ. ಆಗ ನೀವು ಪಾಪ ಮಾಡುವುದಿಲ್ಲ''
ಎಂದು ಹೇಳಿದನು.

21ದೇವರ ಸನ್ನಿಧಾನಕ್ಕೆ ಹೋಗಲು ಮೋಶೆಯು
ಕಾರ್ಮುಗಿಲಿನೊಳಗೆ ಹೋದಾಗ, ಜನರು ಬೆಟ್ಟದಿಂದ
ದೂರ ನಿಂತುಕೊಂಡರು. 22ಆಗ ಯೆಹೋವನು ಈ
ಸಂಗತಿಗಳನ್ನು ಇಸ್ರೇಲರಿಗೆ ತಿಳಿಸಲು ಮೋಶೆಗೆ ಆಜ್ಞಾಪಿ
ಸಿದನು: ''ನಾನು ಪರಲೋಕದಿಂದ ನಿಮ್ಮ ಸಂಗಡ
ಮಾತಾಡಿದ್ದನ್ನು ನೀವು ನೋಡಿದ್ದೀರಿ. 23ಆದ್ದರಿಂದ
ನನ್ನೊಡನೆ ಸ್ಪರ್ಧಿಸಲು, ನೀವು ಬೆಳ್ಳಿಬಂಗಾರಗಳಿಂದ

**ನೀವು ... ಹೇಳಬಾರದು** ಅಥವಾ ''ನೀವು ನಿಮ್ಮ ನೆರೆಯವರ ವಿರುದ್ಧ ಸಾಕ್ಷಿಯಾಗಿರಬಾರದು.''

ಮೂರ್ತಿಗಳನ್ನು ಮಾಡಿಕೊಳ್ಳಬಾರದು. ಈ ಸುಳ್ಳು ದೇವರುಗಳನ್ನು ನೀವು ಮಾಡಿಕೊಳ್ಳಲೇಬಾರದು.''

24''ಒಂದು ವಿಶೇಷ ಯಜ್ಞವೇದಿಕೆಯನ್ನು ನನ
ಗೋಸ್ಕರ ಮಣ್ಣಿನಿಂದ ಕಟ್ಟಿರಿ. ಈ ಯಜ್ಞವೇದಿಕೆಯ
ಮೇಲೆ ಕುರಿದನಗಳನ್ನು ನನಗೆ ಸರ್ವಾಂಗ ಹೋಮಗಳ
ನ್ನಾಗಿಯೂ ಸಮಾಧಾನಯಜ್ಞಗಳನ್ನಾಗಿಯೂ ಸಮರ್ಪಿ
ಸಿರಿ. ನಾನು ನಿಮಗೆ ಹೇಳುವ ಪ್ರತಿಯೊಂದು ಸ್ಥಳದ
ಲ್ಲಿಯೂ ನನ್ನನ್ನು ಜ್ಞಾಪಕಮಾಡಿಕೊಳ್ಳಲು ಹೀಗೆಯೇ
ಮಾಡಿರಿ. ಆಗ ನಾನು ಬಂದು ನಿಮ್ಮನ್ನು ಆಶೀರ್ವದಿಸು
ವೆನು. 25ನೀವು ಯಜ್ಞವೇದಿಕೆಯನ್ನು ಕಲ್ಲುಗಳಿಂದ ಕಟ್ಟ
ಬೇಕೆಂದಿದ್ದರೆ, ಉಳಿಯಿಂದ* ಕೆತ್ತಿದ ಕಲ್ಲುಗಳನ್ನು ಉಪ
ಯೋಗಿಸಬೇಡಿರಿ. ಅಂಥ ಕಲ್ಲುಗಳನ್ನು ಉಪಯೋಗಿಸಿ
ದರೆ, ಯಜ್ಞವೇದಿಕೆಯು ಅಪವಿತ್ರವಾಗುವುದು.
26ಅಲ್ಲದೆ ಯಜ್ಞವೇದಿಕೆಯನ್ನು ಹತ್ತುವುದಕ್ಕೆ ಮೆಟ್ಟಲು
ಗಳನ್ನು ಮಾಡಬಾರದು. ಮೆಟ್ಟಲುಗಳಿದ್ದರೆ ಜನರು ತಲೆ
ಎತ್ತಿ ಯಜ್ಞವೇದಿಕೆಯನ್ನು ನೋಡುವಾಗ ನಿಮ್ಮ
ರಹಸ್ಯಾಂಗವು ಕಾಣಿಸೀತು.''

### ಇತರ ಕಟ್ಟಳೆಗಳು ಮತ್ತು ಆಜ್ಞೆಗಳು

21 ಬಳಿಕ ದೇವರು ಮೋಶೆಗೆ ಹೇಳಿದ್ದೇನೆಂದರೆ, ''ನೀನು ಜನರಿಗೆ ನೇಮಿಸಬೇಕಾದ ಇತರ ಕಟ್ಟಳೆಗಳು ಯಾವದೆಂದರೆ:

2''ನೀವು ಇಬ್ರಿಯ* ಗುಲಾಮನನ್ನು ಕೊಂಡು
ಕೊಂಡರೆ, ಆ ಗುಲಾಮನು ಆರು ವರುಷಗಳವರೆಗೆ
ಮಾತ್ರ ನಿಮ್ಮ ಸೇವಮಾಡುವನು. ಆರು ವರುಷಗಳ
ನಂತರ, ಅವನು ಬಿಡುಗಡೆಯಾಗುವನು, ಅವನು ಏನೂ
ಕೊಡಬೇಕಾಗಿರುವುದಿಲ್ಲ. 3ಅವನು ನಿಮ್ಮ ಗುಲಾಮ
ನಾಗುವಾಗ ಮದುವೆಯಾಗಿಲ್ಲದಿದ್ದರೆ, ಅವನು ಬಿಡುಗಡೆ
ಹೊಂದುವಾಗಲೂ ಹೆಂಡತಿಯಿಲ್ಲದವನಾಗಿ ಹೋಗು
ವನು. ಆದರೆ ಅವನು ನಿಮ್ಮ ಗುಲಾಮನಾಗುವಾಗ
ಮದುವೆಯಾಗಿದ್ದರೆ ಅವನು ಬಿಡುಗಡೆ ಹೊಂದುವಾಗ
ತನ್ನ ಹೆಂಡತಿಯನ್ನು ಕರೆದುಕೊಂಡು ಹೋಗುವನು.
4ಗುಲಾಮನು ಮದುವೆಯಾಗಿಲ್ಲದಿದ್ದರೆ, ಅವನ ಯಜ
ಮಾನನು ಅವನಿಗೆ ಮದುವೆ ಮಾಡಿಸಬಹುದು. ಆ
ಸ್ತ್ರೀಯು ಮಕ್ಕಳನ್ನು ಹೆತ್ತರೆ, ಆಕೆಯೂ ಆಕೆಯ ಮಕ್ಕಳೂ
ಯಜಮಾನನ ಸ್ವತ್ತಾಗುವರು. ಗುಲಾಮನು ತನ್ನ ಸೇವಾ
ವರ್ಷಗಳನ್ನು ಮುಗಿಸಿದ ತರುವಾಯ ಬಿಡುಗಡೆ
ಹೊಂದುವನು.

5''ಆದರೆ ಒಂದುವೇಳೆ ಆ ಗುಲಾಮನು ತನ್ನ ಯಜ
ಮಾನನ ಸಂಗಡವಿರಲು ಬಯಸುತ್ತೇನೆಂದು ದೃಢಮಾಡಿ
ಕೊಳ್ಳುವನು. ಆಗ ಅವನು, 'ನಾನು ನನ್ನ ಯಜಮಾನ
ನನ್ನು ಪ್ರೀತಿಸುತ್ತೇನೆ. ನಾನು ನನ್ನ ಹೆಂಡತಿ ಮತ್ತು ನನ್ನ
ಮಕ್ಕಳನ್ನು ಪ್ರೀತಿಸುತ್ತೇನೆ. ನಾನು ಬಿಡುಗಡೆ ಹೊಂದುವು
ದಿಲ್ಲ. ನಾನು ಇಲ್ಲೇ ಇರುವೆನು' ಎಂದು ಹೇಳಬೇಕು.
6ಹೀಗಾದರೆ ಯಜಮಾನನು ಆ ಗುಲಾಮನನ್ನು ದೇವರ
ಸನ್ನಿಧಿಗೆ* ಕರೆದುಕೊಂಡು ಬರುವನು. ಯಜಮಾನನು
ಗುಲಾಮನನ್ನು ಕದದ ಬಳಿಗೆ ಅಥವಾ ಬಾಗಿಲಿನ ಮರದ
ನಿಲುವುಪಟ್ಟಿಗಳ ಬಳಿಗೆ ಕರೆದುಕೊಂಡು ಬರುವನು.
ಯಜಮಾನನು ಗುಲಾಮನ ಕಿವಿಗೆ ಚೂಪಾದ ಸಲಾಕೆ
ಯಿಂದ ತೂತುಮಾಡುವನು. ಆಗ ಗುಲಾಮನು ತನ್ನ
ಜೀವಮಾನ ಪರ್ಯಂತ ಆ ಯಜಮಾನನಿಗೆ ಸೇವೆ
ಮಾಡುವನು.

7''ಒಬ್ಬನು ತನ್ನ ಮಗಳನ್ನು ಗುಲಾಮಳನ್ನಾಗಿ
ಮಾರಲು ತೀರ್ಮಾನಿಸಿದರೆ, ಆಕೆಯನ್ನು ಬಿಡುಗಡೆ
ಗೊಳಿಸುವ ನಿಯಮಗಳು ಗುಲಾಮರಾದ ಪುರುಷರನ್ನು
ಬಿಡೆಗಡೆಗೊಳಿಸುವ ನಿಯಮಗಳ ಪ್ರಕಾರ ಇರುವುದಿಲ್ಲ.
8ಯಜಮಾನನು ತನಗಾಗಿ ಆರಿಸಿಕೊಂಡ ಗುಲಾಮಳನ್ನು
ಇಷ್ಟಪಡದಿದ್ದರೆ, ಅವಳನ್ನು ಬಿಡುಗಡೆ ಮಾಡಬಹುದು.
(ಅವಳ ತಂದೆಗೆ ಅವಳನ್ನು ಮಾರಬಹುದು.) ಅವಳನ್ನು
ವಿದೇಶಿಯರಿಗೆ ಮಾರುವ ಹಕ್ಕನ್ನು ಯಜಮಾನನು
ಕಳೆದುಕೊಳ್ಳುತ್ತಾನೆ; ಯಾಕಂದರೆ ಆಕೆಯಲ್ಲಿ ಅವನಿಗಿದ್ದ
ನಂಬಿಕೆಯು ಮುರಿದು ಹೋಯಿತು. 9ಯಜಮಾನನು
ಗುಲಾಮಳನ್ನು ತನ್ನ ಸ್ವಂತ ಮಗನಿಗೆ ಮದುವೆ ಮಾಡಿಸು
ವುದಾಗಿ ವಾಗ್ದಾನ ಮಾಡಿದರೆ, ಅವಳನ್ನು ಗುಲಾಮಳ
ನ್ನಾಗಿ ನೋಡಿಕೊಳ್ಳದೆ ಮಗಳಾಗಿ ನೋಡಿಕೊಳ್ಳಬೇಕು.

10''ಯಜಮಾನನು ಇನ್ನೊಬ್ಬ ಸ್ತ್ರೀಯನ್ನು ಮದುವೆ
ಯಾದರೆ, ಅವನು ತನ್ನ ಮೊದಲನೆಯ ಹೆಂಡತಿಗೆ ಅವನು
ಕೊಡುವ ಆಹಾರ ಅಥವಾ ಬಟ್ಟೆಬರೆಗಳಲ್ಲಿ ಏನೂ ಕಡಿಮೆ
ಮಾಡಬಾರದು; ಮದುವೆಯ ಮೂಲಕ ಆಕೆಯು
ಯಾವ್ಯಾವ ವಸ್ತುಗಳನ್ನು ಹೊಂದಲು ಹಕ್ಕು ಪಡೆದಿರು
ತ್ತಾಳೊ ಅವೆಲ್ಲವನ್ನು ಅವನು ಆಕೆಗೆ ಕೊಡಬೇಕು.
11ಅವನು ಆಕೆಗಾಗಿ ಈ ಮೂರು ಸಂಗತಿಗಳನ್ನು ಮಾಡ
ಬೇಕು. ಇಲ್ಲವಾದರೆ ಅವಳು ಬಿಡುಗಡೆಯಾಗಿದ್ದಾಳೆ.
ಅವಳು ಅವನಿಗೆ ಯಾವ ಸಾಲವನ್ನೂ ತೀರಿಸ ಬೇಕಾಗಿಲ್ಲ.

12''ಒಬ್ಬನು ಮತ್ತೊಬ್ಬನನ್ನು ಹೊಡೆದು ಕೊಂದರೆ,
ಅವನೂ ಕೊಲ್ಲಲ್ಪಡಬೇಕು. 13ಆದರೆ ಕೊಲ್ಲಬೇಕೆಂಬ
ಉದ್ದೇಶವಿಲ್ಲದೆ ಹೊಡೆದಾಗ ಸತ್ತುಹೋದರೆ ಅದು
ದೇವರ ಸಂಕಲ್ಪವೆಂದು ಪರಿಗಣಿಸಬೇಕು. ನಾನು ನೇಮಿ
ಸಲಿರುವ ಆಶ್ರಯಸ್ಥಳಗಳಿಗೆ ಹೊಡೆದವನು ಓಡಿಹೋಗಿ

**ಉಳಿ** ಅಕ್ಷರಶಃ ''ಕತ್ತಿ.''

**ಇಬ್ರಿಯ** ಅಥವಾ ''ಇಸ್ರೇಲಿಯ.''

**ದೇವರ ಸನ್ನಿಧಿ** ನ್ಯಾಯಧಿಪತಿಗಳನ್ನು ''ದೇವರು'' ಎಂದು ಕರೆಯಲಾಗುತ್ತಿತ್ತು. ಇಲ್ಲಿ ಯಜಮಾನನು ಗುಲಾಮನನ್ನು ನ್ಯಾಯಾಲಯಕ್ಕೆ ಕೊಂಡೊಯ್ಯುತ್ತಾನೆ ಎಂಬರ್ಥವನ್ನು ಕೊಡುತ್ತದೆ.

ಸುರಕ್ಷಿತವಾಗಿ ಬದುಕಲಿ. [14]ಆದರೆ ಒಬ್ಬನು ಕೋಪ
ದಿಂದಾಗಲೀ ದ್ವೇಷದಿಂದಾಗಲೀ ಇನ್ನೊಬ್ಬನನ್ನು
ಕೊಂದರೆ, ಆ ಕೊಲೆಗಾರನಿಗೆ ದಂಡನೆಯಾಗಬೇಕು.
ನನ್ನ ಯಜ್ಞವೇದಿಕೆಯಿಂದ ಅವನನ್ನು ದೂರಕ್ಕೆ ತೆಗೆದು
ಕೊಂಡು ಹೋಗಿ ಕೊಲ್ಲಬೇಕು.

[15]‘‘ತಂದೆಯನ್ನಾಗಲೀ ತಾಯಿಯನ್ನಾಗಲೀ ಹೊಡೆ
ಯುವವನನ್ನು ಕೊಲ್ಲಬೇಕು.

[16]‘‘ಒಬ್ಬನು ತಾನು ಕದ್ದವನನ್ನು ಗುಲಾಮನನ್ನಾಗಿ
ಮಾರುವಾಗ ಅಥವಾ ತನ್ನಲ್ಲಿ ಇಟ್ಟುಕೊಂಡಿರುವಾಗ ಸಿಕ್ಕಿ
ಕೊಂಡರೆ ಅವನಿಗೆ ಮರಣಶಿಕ್ಷೆಯಾಗಬೇಕು.

[17]‘‘ತಂದೆಯನ್ನಾಗಲೀ ತಾಯಿಯನ್ನಾಗಲೀ ಶಪಿಸು
ವವನನ್ನೂ ಕೊಲ್ಲಬೇಕು.

[18]‘‘ಇಬ್ಬರು ಜಗಳವಾಡುತ್ತಿರುವಾಗ ಒಬ್ಬನನ್ನು ಕಲ್ಲಿ
ನಿಂದಾಗಲೀ ಮುಷ್ಟಿಯಿಂದಾಗಲೀ ಹೊಡೆದಾಗ,
ಪೆಟ್ಟಾದ ಮನುಷ್ಯನು ಸಾಯದಿದ್ದರೆ, ಹೊಡೆದವನನ್ನು
ಕೊಲ್ಲಬಾರದು. [19]ಗಾಯಗೊಂಡವನು ಕೆಲವು ಕಾಲದ
ವರೆಗೆ ಅವನು ಹಾಸಿಗೆಯಲ್ಲಿರಬೇಕಾದರೆ, ಬಳಿಕ ಅವನು
ಎದ್ದು ಊರುಗೋಲಿನ ಸಹಾಯದಿಂದ ನಡೆಯಬಲ್ಲವ
ನಾದರೆ, ಹೊಡೆದವನು ಅವನನ್ನು ಆರೈಕೆ ಮಾಡಬೇಕು.
ಗಾಯಗೊಂಡವನು ಕೆಲಸಮಾಡಲಾರದೆ ಹೋದ ಸಮ
ಯಕ್ಕೆ ಹೊಡೆದವನು ಹಣಕೊಡಬೇಕು; ಅವನು
ಸಂಪೂರ್ಣ ವಾಸಿಯಾಗುವವರೆಗೆ ಆರೈಕೆ ಮಾಡಬೇಕು.

[20]‘‘ಕೆಲವು ಸಲ ಯಜಮಾನರು ಗುಲಾಮನನ್ನಾಗಲೀ
ಗುಲಾಮಳನ್ನಾಗಲೀ ಹೊಡೆಯುತ್ತಾರೆ. ಹೊಡೆದಾಗ ಆ
ವ್ಯಕ್ತಿಯು ಸತ್ತರೆ, ಯಜಮಾನನಿಗೆ ಶಿಕ್ಷೆಯಾಗಬೇಕು.
[21]ಆದರೆ ಆ ವ್ಯಕ್ತಿಯು ಸಾಯದೆ ಕೆಲವು ದಿನಗಳ ನಂತರ
ಗುಣವಾದರೆ ಯಜಮಾನನಿಗೆ ಶಿಕ್ಷೆಯಾಗಬಾರದು.
ಯಾಕಂದರೆ ಯಜಮಾನನು ಹಣವನ್ನು ಕೊಟ್ಟು ಆ ವ್ಯಕ್ತಿ
ಯನ್ನು ಕೊಂಡುಕೊಂಡಿದ್ದಾನೆ ಮತ್ತು ಆ ವ್ಯಕ್ತಿಯು
ಅವನ ಸ್ವತ್ತಾಗಿದ್ದಾನೆ.

[22]‘‘ಇಬ್ಬರು ಜಗಳವಾಡುವಾಗ ಗರ್ಭಿಣಿ ಸ್ತ್ರೀಗೆ ಪೆಟ್ಟಾಗಿ
ಗರ್ಭಸ್ರಾವವಾದರೆ ಅದಕ್ಕೆ ಕಾರಣನಾದ ವ್ಯಕ್ತಿಯು ಅವ
ಳಿಗೆ ದಂಡ ಕೊಡಬೇಕು. ಅವನು ಎಷ್ಟು ದಂಡ ಕೊಡ
ಬೇಕೆಂಬುದನ್ನು ಅವಳ ಗಂಡನು ನ್ಯಾಯಾಧಿಪತಿಗಳ
ಸಹಾಯದಿಂದ ತೀರ್ಮಾನಿಸುವನು. [23]ಆದರೆ ಆ
ಸ್ತ್ರೀಯು ತೀರಿಕೊಂಡರೆ ಅದಕ್ಕೆ ಕಾರಣನಾದವನಿಗೆ
ಮರಣದಂಡನೆಯಾಗಬೇಕು. ನೀವು ಪ್ರಾಣಕ್ಕೆ ಪ್ರತಿ
ಯಾಗಿ ಪ್ರಾಣವನ್ನು ಕೊಡಿಸಬೇಕು. [24]ಕಣ್ಣಿಗೆ ಪ್ರತಿಯಾಗಿ
ಕಣ್ಣು, ಹಲ್ಲಿಗೆ ಪ್ರತಿಯಾಗಿ ಹಲ್ಲು, ಕೈಗೆ ಪ್ರತಿಯಾಗಿ ಕೈ,
ಕಾಲಿಗೆ ಪ್ರತಿಯಾಗಿ ಕಾಲು, [25]ಬರೆಗೆ ಪ್ರತಿಯಾಗಿ ಬರೆ,
ಗಾಯಕ್ಕೆ ಪ್ರತಿಯಾಗಿ ಗಾಯ, ಏಟಿಗೆ ಪ್ರತಿಯಾಗಿ ಏಟು
ಈ ಮೇರೆಗೆ ಪ್ರತಿದಂಡನೆಯಾಗಬೇಕು.

[26]‘‘ಯಜಮಾನನು ಗುಲಾಮನಿಗೆ ಹೊಡೆದಾಗ ಗುಲಾ
ಮನು ಕುರುಡನಾದರೆ, ಆ ಗುಲಾಮನು ಬಿಡುಗಡೆ
ಹೊಂದಿದ್ದಾನೆ. ಅವನು ತನ್ನ ಬಿಡುಗಡೆಗೆ ತನ್ನ ಕಣ್ಣನ್ನೇ
ಪ್ರತಿಯಾಗಿ ಕೊಟ್ಟಿದ್ದಾನೆ. ಗುಲಾಮನ ಅಥವಾ ಗುಲಾ
ಮಳ ವಿಷಯದಲ್ಲಿಯೂ ಇದೇ ನಿಯಮ ಅನ್ವಯಿಸು
ತ್ತದೆ. [27]ಯಜಮಾನನು ಗುಲಾಮನ ಬಾಯಿಗೆ ಹೊಡೆದ
ದ್ದರಿಂದ, ಗುಲಾಮನು ತನ್ನ ಹಲ್ಲನ್ನು ಕಳೆದುಕೊಂಡರೆ,
ಆ ಗುಲಾಮನ ಹಲ್ಲು ಅವನ ಬಿಡುಗಡೆಗೆ ಕೊಟ್ಟ ಹಣ
ವಾಗಿದೆ. ಗುಲಾಮನ ಅಥವಾ ಗುಲಾಮಳ ವಿಷಯದಲ್ಲಿ
ಇದೇ ನಿಯಮವು ಅನ್ವಯಿಸುತ್ತದೆ.

[28]‘‘ಒಬ್ಬನ ಎತ್ತು ಪುರುಷನನ್ನಾಗಲೀ, ಸ್ತ್ರೀಯನ್ನಾಗಲೀ
ಕೊಂದರೆ, ಆಗ ನೀವು ಕಲ್ಲುಗಳಿಂದ ಆ ಎತ್ತನ್ನು
ಕೊಲ್ಲಬೇಕು. ನೀವು ಅದರ ಮಾಂಸವನ್ನು ತಿನ್ನಬಾರದು.
ಆದರೆ ಎತ್ತಿನ ಮಾಲೀಕನು ತಪ್ಪಿತಸ್ಥನಲ್ಲ. [29]ಆದರೆ
ಹಿಂದೊಮ್ಮೆ ಆ ಎತ್ತು ಜನರಿಗೆ ತಿವಿದಿದ್ದು, ಅದರ
ಮಾಲೀಕನಿಗೆ ಇದರ ವಿಷಯದಲ್ಲಿ ಎಚ್ಚರಿಕೆ ನೀಡಿದ್ದರೆ ಆಗ
ಆ ಮಾಲೀಕನು ತಪ್ಪಿತಸ್ಥನಾಗಿದ್ದಾನೆ. ಯಾಕಂದರೆ ಅವನು
ಆ ಎತ್ತನ್ನು ಕಟ್ಟಿಹಾಕಲಿಲ್ಲ ಅಥವಾ ಅದರ ಸ್ಥಳದಲ್ಲಿ
ಬಂಧಿಸಿರಲಿಲ್ಲ. ಆದ್ದರಿಂದ ಎತ್ತನ್ನು ಕಟ್ಟಿಹಾಕದೆ
ಇದ್ದುದರಿಂದ, ಅದು ಯಾರನ್ನಾದರೂ ಕೊಂದರೆ, ಆಗ
ಆ ಮಾಲೀಕನು ತಪ್ಪಿತಸ್ಥನಾಗಿದ್ದಾನೆ. ನೀವು ಎತ್ತನ್ನು ಕಲ್ಲೆ
ಸೆದು ಕೊಲ್ಲಬೇಕಲ್ಲದೆ ಅದರ ಮಾಲೀಕನನ್ನೂ ಕೊಲ್ಲ
ಬೇಕು. [30]ಆದರೆ ಸತ್ತವನ ಕುಟುಂಬದವರು ಅವನಿಂದ
ಹಣವನ್ನು ಕೇಳಿದರೆ ಮತ್ತು ಅವನು ಹಣವನ್ನು ಕೊಟ್ಟರೆ,
ಅವನು ತನ್ನ ಜೀವವನ್ನು ಬಿಡಿಸಿಕೊಂಡಂತಾಗುವುದು.
ಆಗ ಆ ಎತ್ತಿನ ಮಾಲೀಕನನ್ನು ಕೊಲ್ಲಬಾರದು. ಆದರೆ
ನ್ಯಾಯಾಧಿಪತಿಗಳು ತೀರ್ಮಾನಿಸುವಷ್ಟು ಹಣವನ್ನು
ಅವನು ಕೊಡಬೇಕು.

[31]‘‘ಎತ್ತು ಒಬ್ಬನ ಮಗನನ್ನಾಗಲೀ ಅಥವಾ ಮಗಳ
ನ್ನಾಗಲೀ ಕೊಂದರೆ ಇದೇ ನಿಯಮವನ್ನು ಪಾಲಿಸಬೇಕು.
[32]ಆದರೆ ಎತ್ತು ಗುಲಾಮನನ್ನು ಕೊಂದರೆ, ಆಗ ಆ ಪಶು
ವಿನ ಮಾಲೀಕನು ಗುಲಾಮನ ಯಜಮಾನನಿಗೆ ಮೂವತ್ತು
ಬೆಳ್ಳಿಯ ನಾಣ್ಯಗಳನ್ನು* ಕೊಡಬೇಕು ಮತ್ತು ಎತ್ತನ್ನು
ಕಲ್ಲುಗಳಿಂದ ಹೊಡೆದು ಕೊಲ್ಲಬೇಕು. ಗುಲಾಮನ
ಅಥವಾ ಗುಲಾಮಳ ವಿಷಯದಲ್ಲಿ ಇದೇ ನಿಯಮವನ್ನು
ಪಾಲಿಸಬೇಕು. [33]‘‘ಒಬ್ಬ ಮನುಷ್ಯನು ಕುಣಿಯೊಂದನ್ನು
ತೋಡಿ ಅದನ್ನು ಮುಚ್ಚಿಲ್ಲದಿದ್ದರೆ ಮತ್ತು ಆ ಕುಣಿಯಲ್ಲಿ
ಬೇರೊಬ್ಬನ ಪಶುವು ಬಿದ್ದು ಸತ್ತುಹೋದರೆ,
[34]ಕುಣಿಯನ್ನು ತೋಡಿದವನು ಆ ಪಶುವಿಗೆ ಪ್ರತಿಯಾಗಿ
ಈಡುಕೊಡಬೇಕು. ಅವನು ಈಡುಕೊಟ್ಟ ನಂತರ ಆ ಸತ್ತ
ಪಶುವು ಅವನದಾಗುತ್ತದೆ.

---

**ಮೂವತ್ತು ಬೆಳ್ಳಿ ನಾಣ್ಯಗಳು** ಹೊಸ ಗುಲಾಮನೊಬ್ಬನ ಬೆಲೆ.

35‘‘ಒಬ್ಬನ ಎತ್ತು ಇನ್ನೊಬ್ಬನ ಎತ್ತನ್ನು ಕೊಂದರೆ ಆಗ
ಜೀವಂತವಾಗಿರುವ ಎತ್ತನ್ನು ಮಾರಬೇಕು. ಆ ಎತ್ತನ್ನು
ಮಾರಿದ್ದರಿಂದ ಬಂದ ಹಣವನ್ನು ಸಮವಾಗಿ ಹಂಚಿಕೊಳ್ಳ
ಬೇಕು. ಕೊಲ್ಲಲ್ಪಟ್ಟ ಪಶುವನ್ನು ಸಮವಾಗಿ ಹಂಚಿಕೊಳ್ಳ
ಬೇಕು. 36ಆದರೆ ಒಬ್ಬನ ಎತ್ತು ಮೊದಲೊಮ್ಮೆ ಇತರ ಪಶು
ಗಳಿಗೆ ಗಾಯಮಾಡಿದ್ದರೆ, ಅದರ ಮಾಲಿಕನು ಅದನ್ನು
ಕಟ್ಟಿಹಾಕದೆ ಇದ್ದುದರ ನಿಮಿತ್ತ ತಪ್ಪಿತಸ್ಥನಾಗಿದ್ದಾನೆ.
ಅವನು ಸತ್ತ ಎತ್ತಿಗೆ ಪ್ರತಿಯಾಗಿ ಸ್ವಂತ ಎತ್ತನ್ನು ಕೊಡ
ಬೇಕು.

22 ‘‘ಒಬ್ಬನು ಎತ್ತನ್ನಾಗಲೀ ಕುರಿಯನ್ನಾಗಲೀ
ಕದ್ದು ಅದನ್ನು ಕೊಯಿದರೆ ಅಥವಾ ಮಾರಿದರೆ,
ಅವನು ತಾನು ಕದ್ದ ಎತ್ತಿಗೆ ಪ್ರತಿಯಾಗಿ ಐದು ಎತ್ತು
ಗಳನ್ನೂ ಅಥವಾ ತಾನು ಕದ್ದ ಕುರಿಗೆ ಪ್ರತಿಯಾಗಿ ನಾಲ್ಕು
ಕುರಿಗಳನ್ನೂ ಕೊಡಬೇಕು. 2-4ಅವನಲ್ಲಿ ಏನೂ ಇಲ್ಲದ
ಪಕ್ಷಕ್ಕೆ, ಅವನು ಗುಲಾಮನಾಗುವನು. ಆದರೆ ಆ ಕಳ್ಳನು
ಪಶುವನ್ನು ಇನ್ನೂ ಇಟ್ಟುಕೊಂಡಿರುವುದು ನಿಮಗೆ
ಗೊತ್ತಾದರೆ, ಅವನು ಕದ್ದ ಪಶುವಿಗೆ ಪ್ರತಿಯಾಗಿ ಎರಡು
ಪಶುಗಳನ್ನು ಮಾಲಿಕನಿಗೆ ಕೊಡಿಸಬೇಕು. ಕದ್ದದ್ದು
ಎತ್ತಾಗಿರಬಹುದು, ಕತ್ತೆಯಾಗಿರಬಹುದು ಅಥವಾ ಕುರಿ
ಯಾಗಿರಬಹುದು.

ಕಳ್ಳನು ರಾತ್ರಿಯಲ್ಲಿ ಮನೆಗೆ ಕನ್ನ ಹಾಕಲು ಪ್ರಯತ್ನಿಸು
ತ್ತಿರುವಾಗ ಕೊಲ್ಲಲ್ಪಟ್ಟರೆ, ಅವನನ್ನು ಕೊಂದದ್ದಕ್ಕೆ
ಯಾರೂ ತಪ್ಪಿತಸ್ಥರಾಗುವುದಿಲ್ಲ, ಆದರೆ ಇದು ಹಗಲಿ
ನಲ್ಲಿ ನಡೆದರೆ ಕೊಂದವನು ಕೊಲೆಗಾರನಾಗುವನು.

5‘‘ಒಬ್ಬನು ತನ್ನ ಹೊಲದಲ್ಲಾಗಲೀ ದ್ರಾಕ್ಷಿ ತೋಟದ
ಲ್ಲಾಗಲೀ ತನ್ನ ಪಶುವಿಗೆ ಮೇಯಲು ಬಿಡಬಹುದು.
ಆದರೆ ಅದು ಅವನ ನೆರೆಯವನ ಹೊಲವನ್ನಾಗಲೀ,
ದ್ರಾಕ್ಷಿತೋಟವನ್ನಾಗಲೀ, ಹಾಳು ಮಾಡಿದರೆ, ಅವನು
ತನ್ನ ನೆರೆಯವನಿಗೆ ಉಂಟಾದ ನಷ್ಟಕ್ಕೆ ಪ್ರತಿಯಾಗಿ ತನ್ನ
ಉತ್ತಮ ಬೆಳೆಗಳನ್ನು ಕೊಡಬೇಕು.

6‘‘ಒಬ್ಬನು ತನ್ನ ಹೊಲದಲ್ಲಿರುವ ಮುಳ್ಳಿನ ಪೊದೆ
ಗಳನ್ನು ಸುಟ್ಟುಹಾಕಲು ಬೆಂಕಿಯನ್ನು ಹೊತ್ತಿಸಬಹುದು.
ಆದರೆ ಬೆಂಕಿಯು ಹೆಚ್ಚಾಗಿ ಅವನ ನೆರೆಯವನ ಬೆಳೆ
ಯನ್ನಾಗಲೀ ಬೆಳೆಯುತ್ತಿರುವ ಧಾನ್ಯಗಳನ್ನಾಗಲೀ ಸುಟ್ಟು
ಹಾಕಿದರೆ ಬೆಂಕಿಯನ್ನು ಹೊತ್ತಿಸಿದವನು ತಾನು ಸುಟ್ಟು
ಹಾಕಿದ ವಸ್ತುಗಳಿಗೆ ಪ್ರತಿಯಾಗಿ ಈಡುಕೊಡಬೇಕು.

7‘‘ಒಬ್ಬನು ತನ್ನ ನೆರೆಯವನ ಮನೆಯಲ್ಲಿ ಸ್ವಲ್ಪ ಹಣವ
ನ್ನಾಗಲೀ ವಸ್ತುಗಳನ್ನಾಗಲೀ ಇಟ್ಟಿದ್ದು, ಆ ಹಣವಾಗಲೀ
ವಸ್ತುಗಳಾಗಲೀ ಕಳುವಾದರೆ ಕಳ್ಳನನ್ನು ಕಂಡು
ಹಿಡಿಯಲು ನೀವು ಪ್ರಯತ್ನಿಸಬೇಕು. ನೀವು ಕಳ್ಳನನ್ನು
ಕಂಡುಹಿಡಿದರೆ, ಆಗ ಅವನು ತಾನು ಕದ್ದವಸ್ತುಗಳ
ಬೆಲೆಯ ಎರಡರಷ್ಟನ್ನು ಕೊಡಬೇಕು. 8ಆದರೆ ನೀವು ಕಳ್ಳ
ನನ್ನು ಕಂಡುಹಿಡಿಯಲಾಗದಿದ್ದರೆ, ಆ ಮನೆಯ ಮಾಲಿ
ಕನು ತಪ್ಪಿತಸ್ಥನಾಗಿದ್ದಾನೋ ಇಲ್ಲವೋ ಎಂದು
ದೇವರು* ನಿರ್ಣಯಿಸುವನು. ಮನೆಯ ಮಾಲಿಕನು
ದೇವರ ಸನ್ನಿಧಿಗೆ ಹೋಗಬೇಕು. ಅವನು ಕದ್ದಿದ್ದಾನೋ
ಇಲ್ಲವೋ ಎಂದು ದೇವರು ತೀರ್ಮಾನಿಸುವನು.

9‘‘ಕಳೆದುಹೋದ ಎತ್ತು, ಕತ್ತೆ, ಕುರಿ, ಬಟ್ಟೆಬರೆ,
ಅಥವಾ ವಸ್ತುವಿನ ವಿಷಯದಲ್ಲಿ ಒಬ್ಬನು, ‘ಇದು ನನ್ನದು’
ಎಂದು ಹೇಳಿದರೆ ಮತ್ತು ಇನ್ನೊಬ್ಬನು, ‘ಇಲ್ಲ, ಇದು
ನನ್ನದು’ ಎಂದು ಹೇಳಿದರೆ, ಇವರಿಬ್ಬರೂ ದೇವರ ಸನ್ನಿ
ಧಿಗೆ ಹೋಗಬೇಕು. ತಪ್ಪಿತಸ್ಥನಾರೆಂದು ದೇವರು
ತೀರ್ಮಾನಿಸುವನು. ತಪ್ಪಿತಸ್ಥನು ಇನ್ನೊಬ್ಬನಿಗೆ ಕಳೆದು
ಹೋದ ವಸ್ತುವಿನ ಬೆಲೆಯ ಎರಡರಷ್ಟನ್ನು ಕೊಡಬೇಕು.

10‘‘ಸ್ವಲ್ಪಕಾಲದವರೆಗೆ ತನ್ನ ಪಶುವನ್ನು ಪೋಷಿಸ
ಬೇಕೆಂದು ತನ್ನ ನೆರೆಯವನನ್ನು ಕೇಳಿಕೊಳ್ಳಬಹುದು. ಈ
ಪಶುವು ಕತ್ತೆಯಾಗಿರಬಹುದು, ಎತ್ತಾಗಿರಬಹುದು, ಕುರಿ
ಯಾಗಿರಬಹುದು ಅಥವಾ ಯಾವುದೇ ಪಶುವಾಗಿರ
ಬಹುದು. ಆದರೆ ಅದು ಸತ್ತರೆ ಅಥವಾ ಅದಕ್ಕೆ ಪೆಟ್ಟಾದರೆ
ಅಥವಾ ಕಳುವಾದರೆ, 11ಆ ನೆರೆಯವನು ಆ ಪಶುವನ್ನು
ಕದ್ದಿಲ್ಲದಿದ್ದರೆ ತಾನು ಕದ್ದಿಲ್ಲವೆಂದು ಯೆಹೋವನ ಹೆಸರಿ
ನಲ್ಲಿ ಪ್ರಮಾಣ ಮಾಡಬೇಕು. ಪಶುವಿನ ಮಾಲಿಕನು ಈ
ಪ್ರಮಾಣವನ್ನು ಸ್ವೀಕರಿಸಬೇಕು. ನೆರೆಯವನು ಮಾಲಿಕ
ನಿಗೆ ಪಶುವಿಗಾಗಿ ಈಡುಕೊಡಬೇಕಾಗಿಲ್ಲ. 12ಆದರೆ
ಪಶುವು ಕದಿಯಲ್ಪಟ್ಟಿದ್ದರೆ, ಅವನು ಅದಕ್ಕಾಗಿ ಈಡು
ಕೊಡಬೇಕು. 13ಕ್ರೂರಪ್ರಾಣಿಗಳು ಆ ಪಶುವನ್ನು
ಕೊಂದು ಹಾಕಿದ್ದರೆ, ನೆರೆಯವನು ಸತ್ತ ಪಶುವನ್ನು ಸಾಕ್ಷಿ
ಯಾಗಿ ತರಬೇಕು. ನೆರೆಯವನು ಮಾಲಿಕನಿಗೆ ಸತ್ತ
ಪಶುವಿಗಾಗಿ ಈಡುಕೊಡಬೇಕಾಗಿಲ್ಲ.

14‘‘ಒಬ್ಬನು ತನ್ನ ನೆರೆಯವನಿಂದ ಪಶುವನ್ನು ಸ್ವಲ್ಪ
ಕಾಲಕ್ಕೆ ಸಾಲವಾಗಿ ತೆಗೆದುಕೊಂಡಿರುವಾಗ ಅದರ ಮಾಲಿ
ಕನು ಅದರ ಸಮೀಪದಲ್ಲಿ ಇಲ್ಲದಿರುವ ಸಮಯದಲ್ಲಿ ಆ
ಪಶುವಿಗೆ ಗಾಯವಾದರೆ ಅಥವಾ ಅದು ಸತ್ತುಹೋದರೆ,
ಸಾಲ ತೆಗೆದುಕೊಂಡವನು ಆ ಪಶುವಿಗೆ ಈಡು
ಕೊಡಬೇಕು. 15ಆದರೆ ಅದರ ಮಾಲಿಕನು ಪಶುವಿ
ನೊಂದಿಗೆ ಅಲ್ಲಿದ್ದರೆ ಆಗ ನೆರೆಯವನು ಈಡುಕೊಡ
ಬೇಕಾಗಿಲ್ಲ. ನೆರೆಯವನು ಪಶುವನ್ನು ಬಾಡಿಗೆಗೆ ತೆಗೆದು
ಕೊಂಡಿರುವಾಗ ಆ ಪಶು ಸತ್ತರೆ ಅಥವಾ ಅದಕ್ಕೆ ಪೆಟ್ಟಾದರೆ
ಅವನು ಈಡುಕೊಡಬೇಕಾಗಿಲ್ಲ. ಆ ಪಶುವನ್ನು ಉಪ
ಯೋಗಿಸಲು ಅವನು ಕೊಟ್ಟ ಬಾಡಿಗೆಯೇ ಸಾಕು.

16‘‘ಒಬ್ಬನು ಕನ್ನಿಕೆಯನ್ನು ಮರುಳುಗೊಳಿಸಿ ಕೂಡಿ
ದರೆ, ಅವನು ಅವಳನ್ನು ಮದುವೆಯಾಗಬೇಕು. ಅವನು

---

**ದೇವರು** ಕೆಲವೊಮ್ಮೆ ನ್ಯಾಯಾಧಿಪತಿಗಳನ್ನು ದೇವರು ಎಂದು ಕರೆಯಲಾಗುತ್ತಿತ್ತು.

ಆಕೆಯ ತಂದೆಗೆ ತಕ್ಕ ತೆರವನ್ನು ಕೊಡಬೇಕು. 17ತಂದೆಯು
ತನ್ನ ಮಗಳನ್ನು ಅವನಿಗೆ ಕೊಡಲು ನಿರಾಕರಿಸಿದರೂ
ಅವನು ತೆರವನ್ನು ಕೊಡಬೇಕು. ಅವನು ಅವಳಿಗೋಸ್ಕರ
ಪೂರ್ಣ ತೆರವನ್ನು ಕೊಡಬೇಕು.

18“ಮಾಟಗಾರ್ತಿಯನ್ನು ನೀವು ಜೀವಸಹಿತ ಉಳಿಸ
ಬಾರದು.

19“ಪಶುಸಂಗ ಮಾಡಿದವನಿಗೆ ಮರಣದಂಡನೆಯಾಗ
ಬೇಕು.

20“ಸುಳ್ಳುದೇವರಿಗೆ ಯಜ್ಞವನ್ನರ್ಪಿಸುವವನನ್ನು ನಾಶ
ಮಾಡಬೇಕು.* ನೀವು ದೇವರಾದ ಯೆಹೋವನೊಬ್ಬ
ನಿಗೇ ಯಜ್ಞವನ್ನರ್ಪಿಸಬೇಕು.

21“ನೀವು ಮೊದಲು ಈಜಿಪ್ಟಿನಲ್ಲಿ ಪರದೇಶಸ್ಥರಾಗಿದ್ದ
ದ್ದನ್ನು ಜ್ಞಾಪಕ ಮಾಡಿಕೊಳ್ಳಿ. ಆದ್ದರಿಂದ ನೀವು ಮೋಸ
ಮಾಡಬಾರದು; ನಿಮ್ಮ ದೇಶದಲ್ಲಿರುವ ಯಾವ ಪರ
ದೇಶಸ್ಥನಿಗೂ ಕೇಡು ಮಾಡಬಾರದು.

22“ನೀವೆಂದಿಗೂ ವಿಧವೆಯರಿಗೆ ಅಥವಾ ಅನಾಥ
ಮಕ್ಕಳಿಗೆ ಕೇಡು ಮಾಡಬಾರದು. 23ನೀವು ಆ ವಿಧವೆಯ
ರಿಗೆ ಅಥವಾ ಅನಾಥರಿಗೆ ಕೇಡುಮಾಡಿದರೆ, ನಾನು ಅವರ
ಗೋಳಾಟವನ್ನು ಕೇಳಿ, 24ನಿಮ್ಮ ಮೇಲೆ ಕೋಪಗೊಳ್ಳು
ವೆನು; ಕತ್ತಿಯಿಂದ ನಿಮ್ಮನ್ನು ಕೊಲ್ಲುವೆನು. ಆಗ ನಿಮ್ಮ
ಹೆಂಡತಿಯರು ವಿಧವೆಯರಾಗುವರು; ನಿಮ್ಮ ಮಕ್ಕಳು
ಅನಾಥರಾಗುವರು.

25“ನನ್ನ ಜನರಲ್ಲಿ ಬಡವನಾಗಿರುವವನಿಗೆ ನೀವು ಹಣ
ವನ್ನು ಸಾಲಕೊಟ್ಟರೆ, ನೀವು ಆ ಹಣಕ್ಕೆ ಬಡ್ಡಿ ಕೇಳ
ಬಾರದು. ಬೇಗನೆ ಮರುಪಾವತಿ ಮಾಡುವಂತೆ ಅವನನ್ನು
ಬಲವಂತಪಡಿಸಬಾರದು. 26ಯಾವನಾದರೂ ನೀವು
ಕೊಟ್ಟ ಸಾಲಕ್ಕೆ ತನ್ನ ಅಂಗಿಯನ್ನು ಒತ್ತೆಯಾಗಿಟ್ಟರೆ,
ಸೂರ್ಯನು ಮುಳುಗುವ ಮೊದಲೇ ನೀವು ಆ ಅಂಗಿ
ಯನ್ನು ಅವನಿಗೆ ಹಿಂತಿರುಗಿಸಬೇಕು. 27ಯಾಕಂದರೆ
ಅವನಿಗೆ ಬೇರೆ ಯಾವ ಹೊದಿಕೆಯೂ ಇಲ್ಲ; ಅದನ್ನೇ
ಅವನು ಧರಿಸಿಕೊಳ್ಳಬೇಕು. ಅವನು ಮಲಗಿಕೊಳ್ಳುವಾಗ
ಚಳಿಯಿಂದ ನನಗೆ ಮೊರೆಯಿಟ್ಟರೆ, ನಾನು ಅವನ
ಮೊರೆಯನ್ನು ಕೇಳಿ ಅವನಿಗೆ ದಯೆತೋರುವೆನು.

28“ನೀವು ದೇವರನ್ನಾಗಲೀ* ಅಥವಾ ನಿಮ್ಮ
ನಾಯಕರುಗಳನ್ನಾಗಲೀ ಶಪಿಸಬಾರದು.

29“ಸುಗ್ಗಿಕಾಲದಲ್ಲಿ ನೀವು ಪ್ರಥಮಫಲವಾದ ಧಾನ್ಯ
ವನ್ನು ಮತ್ತು ನಿಮ್ಮ ಪ್ರಥಮಫಲವಾದ ದ್ರಾಕ್ಷಾರಸವನ್ನು
ನನಗೆ ಕೊಡಬೇಕು. ನೀವು ಅದನ್ನು ನಿಮಗಾಗಿಯೇ
ಇಟ್ಟುಕೊಳ್ಳಬಾರದು.

“ನಿಮ್ಮ ಚೊಚ್ಚಲು ಗಂಡುಮಕ್ಕಳನ್ನು ನನಗೆ ಪ್ರತಿಷ್ಠಿಸ
ಬೇಕು. 30ಮಾತ್ರವಲ್ಲದೆ, ನಿಮ್ಮ ಕುರಿದನಗಳಲ್ಲಿ
ಚೊಚ್ಚಲಾದವುಗಳನ್ನು ನನಗೆ ಅರ್ಪಿಸಬೇಕು. ಚೊಚ್ಚಲಾ
ದವುಗಳು ತನ್ನ ತಾಯಿಯೊಂದಿಗೆ ಏಳು ದಿನಗಳಿರಲಿ.
ಬಳಿಕ, ಎಂಟನೆಯ ದಿನದಲ್ಲಿ ನೀವು ಅದನ್ನು ನನಗೆ
ಅರ್ಪಿಸಬೇಕು.

31“ನೀವು ನನ್ನ ವಿಶೇಷ ಜನರಾಗಿದ್ದೀರಿ. ಆದ್ದರಿಂದ
ಕ್ರೂರಪ್ರಾಣಿಗಳಿಂದ ಕೊಲ್ಲಲ್ಪಟ್ಟ ಪ್ರಾಣಿಯ ಮಾಂಸ
ವನ್ನು ನೀವು ತಿನ್ನಬಾರದು. ಅದನ್ನು ನಾಯಿಗಳು ತಿನ್ನಲಿ.

23 “ಬೇರೆಯವರ ವಿರುದ್ಧವಾಗಿ ಸುಳ್ಳು ಹೇಳ
ಬೇಡಿರಿ. ನೀವು ನ್ಯಾಯಾಲಯದಲ್ಲಿ ದುಷ್ಟರ
ಸಹಾಯಕ್ಕಾಗಿ ಸುಳ್ಳುಸಾಕ್ಷಿ ಹೇಳದಿರಿ.

2“ದುಷ್ಕಾರ್ಯವನ್ನು ಮಾಡುವವರು ಬಹಳ ಮಂದಿ
ಯೆಂದು ಅವರ ಜೊತೆಯಲ್ಲಿ ಸೇರಿಕೊಳ್ಳಬೇಡಿ. ಬಹಳ
ಮಂದಿಯ ಮಾತಿಗೆ ಒಪ್ಪಿ ನ್ಯಾಯವನ್ನು ಕೆಡಿಸುವ ಸಾಕ್ಷಿ
ಯನ್ನು ಹೇಳದಿರಿ.

3“ಇದಲ್ಲದೆ ಬಡವನೆಂದು ಕರುಣಿಸಿ ಪಕ್ಷಪಾತದ
ತೀರ್ಪನ್ನು ನೀಡಬಾರದು.

4“ನೀವು ಕಳೆದುಹೋದ ಎತ್ತನ್ನಾಗಲೀ ಕತ್ತೆಯನ್ನಾ
ಗಲೀ ನೋಡಿದರೆ, ಆಗ ನೀವು ಅದನ್ನು ಅದರ ಮಾಲಿಕ
ನಿಗೆ ಹಿಂತಿರುಗಿಸಬೇಕು. ಒಂದುವೇಳೆ ಆ ಮಾಲಿಕನು
ನಿಮ್ಮ ವೈರಿಯಾಗಿದ್ದರೂ ನೀವು ಈ ಕಾರ್ಯವನ್ನು ಮಾಡ
ಬೇಕು.

5“ಬಹು ತೂಕದ ಹೊರೆಯಿಂದ ನಡೆಯಲಾಗದೆ ಬಿದ್ದಿ
ರುವ ಕತ್ತೆಯನ್ನು ನೀವು ನೋಡಿದರೆ ಅದನ್ನು ಎಬ್ಬಿಸಲು
ನೀವು ನಿಂತು ಸಹಾಯ ಮಾಡಬೇಕು. ಆ ಕತ್ತೆಯು ನಿಮ್ಮ
ವೈರಿಯದಾಗಿದ್ದರೂ ನೀವು ಅದಕ್ಕೆ ಸಹಾಯ ಮಾಡ
ಬೇಕು. 6“ಬಡವರು ವ್ಯಾಜ್ಯವಾಡುವಾಗ ನೀವು
ಅನ್ಯಾಯವಾದ ತೀರ್ಪನ್ನು ನೀಡಕೂಡದು.

7“ನೀವು ಮೋಸದ ಕಾರ್ಯದಿಂದ ದೂರವಾಗಿರ
ಬೇಕು. ನಿರಪರಾಧಿಯೂ ನೀತಿವಂತನೂ ಆಗಿರುವ
ವ್ಯಕ್ತಿಗೆ ಮರಣದಂಡನೆ ವಿಧಿಸಲೇಬಾರದು. ಅಂಥ
ದುಷ್ಟತ್ವವನ್ನು ಮಾಡಿದವನಿಗೆ ನಾನು ದಂಡನೆಯನ್ನು
ವಿಧಿಸದೆ ಬಿಡುವುದಿಲ್ಲ.

8“ಲಂಚವನ್ನು ತೆಗೆದುಕೊಳ್ಳಕೂಡದು; ಲಂಚವು ಕಣ್ಣು
ಳ್ಳವರನ್ನು ಕುರುಡರನ್ನಾಗಿ ಮಾಡುತ್ತದೆ; ನಿರಪರಾಧಿಗೆ
ಅನ್ಯಾಯವನ್ನು ಬರಮಾಡುತ್ತದೆ.

9“ನೀವು ಪರದೇಶಸ್ಥರಿಗೆ ತೊಂದರೆ ಕೊಡಬಾರದು.
ನೀವು ಈಜಿಪ್ಟಿನಲ್ಲಿ ಪರದೇಶಸ್ಥರಾಗಿದ್ದಿರೆಂಬುದನ್ನು
ಜ್ಞಾಪಕಮಾಡಿಕೊಳ್ಳಿರಿ.

---

**ನಾಶ** ಕೈಮೀರಿಹೋದ ವಸ್ತುಗಳನ್ನಾಗಲೀ ವ್ಯಕ್ತಿಗಳನ್ನಾಗಲೀ ಯೆಹೋವನ ದಂಡನೆಗೆ ಒಪ್ಪಿಸುವುದನ್ನು ಇದು ಸೂಚಿಸುತ್ತದೆ. ಅನೇಕಸಲ, ಇದು ಸಂಪೂರ್ಣ ನಾಶದಿಂದಾಗಲೀ ಮರಣಶಿಕ್ಷೆಯಿಂದಾಗಲೀ ಕೊನೆಗೊಳ್ಳುತ್ತಿತ್ತು.

**ದೇವರು** ಅಥವಾ ನ್ಯಾಯಾಧಿಪತಿಗಳು.

### ವಿಶೇಷ ವಿಶ್ರಾಂತಿ ದಿನಗಳು

10‘‘ಆರು ವರ್ಷ ನಿಮ್ಮ ಭೂಮಿಯಲ್ಲಿ ಬೀಜಬಿತ್ತಿ ಬೆಳೆ
ಯನ್ನು ಬೆಳೆಯಿರಿ. 11ಆದರೆ ಏಳನೆಯ ವರ್ಷದಲ್ಲಿ ನಿಮ್ಮ
ಭೂಮಿಯನ್ನು ಬೀಳುಬಿಡಿರಿ; ಬೀಜಬಿತ್ತಬೇಡಿರಿ. ಏಳ
ನೆಯ ವರ್ಷ ನೀವು ಏನನ್ನೂ ಬೆಳೆಸಬಾರದು. ನಿಮ್ಮ
ಭೂಮಿಯಲ್ಲಿ ಏನಾದರೂ ಬೆಳೆದರೆ ಅದನ್ನು ಬಡವರು
ತಿನ್ನಲಿ. ಉಳಿದದ್ದನ್ನು ಪ್ರಾಣಿಗಳು ಮೇಯಲಿ. ನಿಮ್ಮ
ದ್ರಾಕ್ಷಿತೋಟಗಳ ವಿಷಯದಲ್ಲಿಯೂ ಆಲಿವ್ ಮರಗಳ
ತೋಪಿನ ವಿಷಯದಲ್ಲಿಯೂ ಇದೇ ನಿಯಮವನ್ನು
ಪಾಲಿಸಬೇಕು.

12‘‘ಆರು ದಿನಗಳಲ್ಲಿ ನಿಮ್ಮ ಕೆಲಸ ಮಾಡಿರಿ. ಏಳನೆಯ
ದಿನದಲ್ಲಿ ವಿಶ್ರಮಿಸಿಕೊಳ್ಳಿರಿ. ಏಳನೆಯ ದಿನದಲ್ಲಿ ನಿಮ್ಮ
ಗುಲಾಮರೂ ಎತ್ತುಗಳೂ ಕತ್ತೆಗಳೂ ವಿದೇಶಿಯರೂ
ವಿಶ್ರಮಿಸಿಕೊಳ್ಳಲಿ.

13‘‘ನೀವು ಈ ಆಜ್ಞೆಗಳಿಗೆಲ್ಲಾ ಜಾಗರೂಕತೆಯಿಂದ
ವಿಧೇಯರಾಗಬೇಕು. ಸುಳ್ಳುದೇವರುಗಳನ್ನು ಆರಾಧಿಸ
ಬೇಡಿರಿ. ನೀವು ಅವುಗಳ ಹೆಸರುಗಳನ್ನೂ ಉಚ್ಚರಿಸ
ಕೂಡದು.

14‘‘ಪ್ರತಿವರ್ಷ ನೀವು ಮೂರುಜಾತ್ರೆಗಳನ್ನು ಮಾಡ
ಬೇಕು. 15ಹುಳಿಯಿಲ್ಲದ ರೊಟ್ಟಿಗಳನ್ನು ತಿನ್ನಬೇಕಾದ
ಹಬ್ಬ ಅವುಗಳಲ್ಲಿ ಒಂದಾಗಿದೆ. ನಾನು ನಿಮಗೆ ಆಜ್ಞಾಪಿಸಿ
ದಂತೆ ಈ ಜಾತ್ರೆಯಲ್ಲಿ ಏಳು ದಿನ ಹುಳಿಯಿಲ್ಲದ ರೊಟ್ಟಿ
ಯನ್ನು ನೀವು ತಿನ್ನಬೇಕು. ಈ ಹಬ್ಬವು ಏಳು ದಿನಗಳ
ವರೆಗೆ ನಡೆಯುವುದು. ನೀವು ಇದನ್ನು ಅಬೀಬ್ ತಿಂಗ
ಳಲ್ಲಿ (ಮಾರ್ಚ್-ಎಪ್ರಿಲ್) ಮಾಡಬೇಕು. ಯಾಕಂದರೆ
ಈ ತಿಂಗಳಲ್ಲಿಯೇ ನೀವು ಈಜಿಪ್ಟಿನಿಂದ ಹೊರಗೆ
ಬಂದಿರಿ! ಈ ಹಬ್ಬದಲ್ಲಿ ಪ್ರತಿಯೊಬ್ಬನೂ ನನಗೆ ಕಾಣಿಕೆ
ಯನ್ನು ಅರ್ಪಿಸಬೇಕು.

16‘‘ಇದಲ್ಲದೆ ನೀವು ಸುಗ್ಗಿಯ ಜಾತ್ರೆಯನ್ನು ಆಚರಿಸ
ಬೇಕು. ನೀವು ಬಿತ್ತಿದ ಹೊಲಗಳಲ್ಲಿ ಬೆಳೆಗಳನ್ನು
ಕೊಯ್ಯುವ ಕಾಲದಲ್ಲಿ ಈ ಜಾತ್ರೆಯು ಆರಂಭ
ವಾಗುವುದು.

‘‘ಇದಲ್ಲದೆ ಫಲಸಂಗ್ರಹ ಜಾತ್ರೆಯನ್ನೂ ನೀವು ಆಚರಿಸ
ಬೇಕು. ವರ್ಷಾಂತ್ಯದಲ್ಲಿ ನೀವು ಹೊಲತೋಟಗಳ ಬೆಳೆಗ
ಳನ್ನೆಲ್ಲಾ ಒಟ್ಟುಗೂಡಿಸುವ ಕಾಲದಲ್ಲಿ ಇದು ಆರಂಭ
ವಾಗುವುದು.

17‘‘ಹೀಗೆ ಪ್ರತಿವರ್ಷ ಮೂರು ಸಲ ಗಂಡಸರೆಲ್ಲರೂ
ಒಂದು ವಿಶೇಷ ಸ್ಥಳಕ್ಕೆ ದೇವರಾದ ಯೆಹೋವನ ಸನ್ನಿಧಿಗೆ
ಬರಬೇಕು.

18‘‘ನೀವು ನನಗೆ ಯಜ್ಞವನ್ನು ಅರ್ಪಿಸುವಾಗ ಯಜ್ಞ
ಪಶುವಿನ ರಕ್ತದೊಡನೆ ಹುಳಿಬೆರಸಿದ ಏನನ್ನೂ ಸಮರ್ಪಿ
ಸಬಾರದು. ಅಲ್ಲದೆ ಅದರ ಮಾಂಸವನ್ನು ಒಂದೇ
ದಿನದಲ್ಲಿ ತಿಂದು ಮುಗಿಸಬೇಕು; ಮರುದಿನದವರೆಗೂ
ಇಟ್ಟುಕೊಳ್ಳಬಾರದು.

19‘‘ಸುಗ್ಗಿ ಕಾಲದಲ್ಲಿ ನಿಮ್ಮ ಬೆಳೆಯ ಫಲವನ್ನು ನಿಮ್ಮ
ದೇವರಾದ ಯೆಹೋವನ ಆಲಯಕ್ಕೆ* ತರಬೇಕು.

‘‘ಆಡುಮರಿಯನ್ನು ಅದರ ತಾಯಿಯ ಹಾಲಿನಲ್ಲಿ
ಬೇಯಿಸಬಾರದು.’’

20‘ಇಗೋ, ನಿಮ್ಮ ಮುಂದೆ ನಾನು ಒಬ್ಬ ದೂತನನ್ನು*
ಕಳುಹಿಸುತ್ತಿದ್ದೇನೆ. ನಾನು ನಿಮಗಾಗಿ ಸಿದ್ಧ ಮಾಡಿದ
ಸ್ಥಳಕ್ಕೆ ಈ ದೂತನು ನಿಮ್ಮನ್ನು ಮುನ್ನಡೆಸುವನು; ದಾರಿ
ಯುದ್ದಕ್ಕೂ ಸಂರಕ್ಷಿಸುವನು. 21ದೂತನಿಗೆ ವಿಧೇಯ
ರಾಗಿ ಆತನನ್ನು ಹಿಂಬಾಲಿಸಿರಿ. ಆತನಿಗೆ ವಿರೋಧವಾಗಿ
ದಂಗೆಯೇಳಬೇಡಿರಿ. ನೀವು ಅವಿಧೇಯರಾದರೆ ಆತನು
ನಿಮ್ಮನ್ನು ಕ್ಷಮಿಸುವುದಿಲ್ಲ. ಆತನಲ್ಲಿ ನನ್ನ ಶಕ್ತಿಯು
ಇರುತ್ತದೆ.* 22ಆತನು ಹೇಳುವ ಪ್ರತಿಯೊಂದಕ್ಕೂ ನೀವು
ವಿಧೇಯರಾಗಬೇಕು. ನನ್ನ ಆಜ್ಞೆಗಳನ್ನೆಲ್ಲಾ ನೀವು ಅನು
ಸರಿಸಬೇಕು. ಆಗ ನಾನು ನಿಮ್ಮ ಸಂಗಡ ಇರುವೆನು.
ನಾನು ನಿಮ್ಮ ಶತ್ರುಗಳಿಗೆ ಶತ್ರುವಾಗಿರುವೆನು; ನಿಮಗೆ
ಕೇಡುಮಾಡುವವರಿಗೆಲ್ಲಾ ಕೇಡು ಮಾಡುವೆನು.’
23‘‘ನನ್ನ ದೂತನು ನಿಮ್ಮ ಮುಂದೆ ನಡೆದು ಅಮೋರಿ
ಯರು, ಹಿತ್ತಿಯರು, ಪೆರಿಜೀಯರು, ಕಾನಾನ್ಯರು,
ಹಿವ್ವಿಯರು ಮತ್ತು ಯೆಬೂಸೀಯರು ಇರುವ ದೇಶಕ್ಕೆ
ನಿಮ್ಮನ್ನು ನಡಿಸುವನು. ನಾನು ಅವರನ್ನೆಲ್ಲಾ
ಸೋಲಿಸುವೆನು.

24‘‘ಅವರ ದೇವರುಗಳನ್ನು ಪೂಜಿಸಬೇಡಿರಿ. ಆ
ದೇವರುಗಳಿಗೆ ನಮಸ್ಕರಿಸಬೇಡಿರಿ. ಅವರ ಆಚರಣೆ
ಗಳನ್ನು ಅನುಸರಿಸಬೇಡಿರಿ. ನೀವು ಅವರ ವಿಗ್ರಹಗಳನ್ನು
ನಾಶಮಾಡಬೇಕು. ಅವರ ಸ್ಮಾರಕಸ್ತಂಭಗಳನ್ನು ಕೆಡವಿ
ಹಾಕಬೇಕು. 25ನೀವು ನಿಮ್ಮ ದೇವರಾದ ಯೆಹೋವ
ನನ್ನೇ ಆರಾಧಿಸಬೇಕು. ಆಗ ಆತನು ನಿಮ್ಮ ಅನ್ನಪಾನ
ಗಳನ್ನು ಆಶೀರ್ವದಿಸುವನು. ನಾನು ನಿಮ್ಮೊಳಗಿಂದ ಎಲ್ಲಾ
ವ್ಯಾಧಿಯನ್ನು ತೆಗೆದುಬಿಡುವೆನು. 26ನಿಮ್ಮ ಸ್ತ್ರೀಯರು
ಮಕ್ಕಳನ್ನು ಪಡೆಯಲು ಶಕ್ತರಾಗುವರು. ನಿಮ್ಮ ಮಕ್ಕಳು
ಹುಟ್ಟುವಾಗಲೇ ಸಾಯುವುದಿಲ್ಲ; ನಿಮಗೆ ದೀರ್ಘಾ
ಯುಷ್ಯವನ್ನು ಅನುಗ್ರಹಿಸುವೆನು.

27‘‘ನೀವು ನಿಮ್ಮ ವೈರಿಗಳ ವಿರುದ್ಧ ಯುದ್ಧ ಮಾಡು
ವಾಗ, ‘‘ನಿಮ್ಮ ವೈರಿಗಳನ್ನೆಲ್ಲಾ ಸೋಲಿಸುವಂತೆ ನಾನು
ನಿಮಗೆ ನನ್ನ ಮಹಾಶಕ್ತಿಯಿಂದ ಸಹಾಯ ಮಾಡುವೆನು.
ನಿಮ್ಮ ವೈರಿಗಳು ಯುದ್ಧದಲ್ಲಿ ಭಯದಿಂದಲೂ ಗಲಿಬಿಲಿ

---

**ಆಲಯ** ಪವಿತ್ರಗುಡಾರ ದೇವರನ್ನು ಭೇಟಿಯಾಗಲು ಜನರು ಇಲ್ಲಿಗೆ ಹೋಗಬೇಕಾಗಿತ್ತು. ವಿಮೋಚನಕಾಂಡ25:8,9ನ್ನು ನೋಡಿರಿ.

**ದೂತ** ದೇವದೂತ.

**ಶಕ್ತಿ ಇರುತ್ತದೆ** ಹೀಬ್ರೂವಿನಲ್ಲಿ: ನನ್ನ ಹೆಸರು ಆತನಲ್ಲಿರುವುದರಿಂದ.

ಯಿಂದಲೂ ಓಡಿಹೋಗುವರು. [28]ನಾನು ನಿಮ್ಮ ಮುಂದೆ
ಹೆದ್ದುಂಬಿಯನ್ನು* ಕಳುಹಿಸುವೆನು. ನಿಮ್ಮ ವೈರಿಗಳಾದ
ಹಿವ್ವಿಯರನ್ನು ಕಾನಾನ್ಯರನ್ನು ಮತ್ತು ಹಿತ್ತಿಯರನ್ನು ಅದು
ಬಲವಂತದಿಂದ ಅಟ್ಟಿಬಿಡುವುದು. [29]ಆದರೆ ನಾನು
ಒಂದೇ ವರ್ಷದಲ್ಲಿ ಅವರೆಲ್ಲರನ್ನೂ ಅಲ್ಲಿಂದ ಹೊರಡಿಸು
ವುದಿಲ್ಲ. ಯಾಕಂದರೆ ದೇಶದಲ್ಲಿ ಜನರು ಕಡಿಮೆಯಾಗು
ವುದರಿಂದ ಕ್ರೂರ ಪ್ರಾಣಿಗಳೆಲ್ಲಾ ಹೆಚ್ಚಾಗಿ ನಿಮಗೆ ಬಹಳ
ತೊಂದರೆಯಾಗಬಹುದು. [30]ಆದ್ದರಿಂದ ನೀವು ಅಭಿವೃದ್ಧಿ
ಯಾಗಿ ದೇಶದಲ್ಲೆಲ್ಲಾ ತುಂಬಿಕೊಳ್ಳುವ ತನಕ ಅವರನ್ನು
ಸ್ವಲ್ಪಸ್ವಲ್ಪವಾಗಿ ಹೊರದೂಡುವೆನು.

[31]‘‘ಕೆಂಪು ಸಮುದ್ರದಿಂದ ಯೂಫ್ರೇಟೀಸ್ ನದಿ
ಯವರೆಗೆ ಇರುವ ಪ್ರದೇಶವನ್ನೆಲ್ಲಾ ಕೊಡುವೆನು. ಪಶ್ಚಿಮ
ಗಡಿಯು ಫಿಲಿಷ್ಟಿಯ ಸಮುದ್ರವಾಗಿರುವುದು (ಮೆಡಿಟ
ರೇನಿಯನ್ ಸಮುದ್ರ) ಮತ್ತು ಪೂರ್ವ ಗಡಿಯು
ಅರೇಬಿಯಾ ಮರುಭೂಮಿಯಾಗಿರುವುದು. ನೀವು
ಅಲ್ಲಿ ವಾಸಿಸುವ ಜನರನ್ನು ಸೋಲಿಸುವಂತೆ ನಾನು
ಮಾಡುವೆನು; ಅವರೆಲ್ಲರನ್ನು ನೀವು ಬಲವಂತವಾಗಿ
ಹೊರಗಟ್ಟುವಿರಿ. [32]‘‘ನೀವು ಆ ಜನರೊಡನೆಯಾಗಲೀ,
ಅವರ ದೇವರುಗಳೊಡನೆಯಾಗಲೀ ಯಾವ ಒಡಂ
ಬಡಿಕೆಯನ್ನೂ ಮಾಡಿಕೊಳ್ಳಬಾರದು. [33]ನಿಮ್ಮ ದೇಶ
ದಲ್ಲಿ ವಾಸಿಸಲು ಅವರನ್ನು ಬಿಡಬೇಡಿರಿ. ಇಲ್ಲವಾದರೆ
ಅವರು ನಿಮ್ಮಲ್ಲಿ ದ್ರೋಹಬುದ್ಧಿಯನ್ನು ಹುಟ್ಟಿಸ
ಬಹುದು. ನೀವು ಅವರ ದೇವರುಗಳನ್ನು ಪೂಜಿಸಿದರೆ
ಆ ಪೂಜೆಯೂ ನಿಮಗೆ ಉರಲಾಗುವುದು.’’

### ದೇವರ ಮತ್ತು ಇಸ್ರೇಲರ ನಡುವೆ ಒಡಂಬಡಿಕೆ

24 ದೇವರು ಮೋಶೆಗೆ, ‘‘ನೀನು ಆರೋನ,
ನಾದಾಬ್, ಅಬೀಹು* ಮತ್ತು ಇಸ್ರೇಲರ
ಎಪ್ಪತ್ತು ಮಂದಿ ಹಿರಿಯರು ಬೆಟ್ಟವನ್ನೇರಿ ಬಂದು ದೂರ
ದಿಂದ ನನ್ನನ್ನು ಆರಾಧಿಸಬೇಕು. [2]ಬಳಿಕ ನೀನು ಮಾತ್ರ
ನನ್ನ ಬಳಿಗೆ ಬರಬೇಕು; ಬೇರೆಯವರು ಬರಕೂಡದು;
ಆದರೆ ಉಳಿದ ಜನರು ಬೆಟ್ಟವನ್ನೂ ಏರಕೂಡದು’’
ಎಂದು ಹೇಳಿದನು.

[3]ಮೋಶೆಯು ಯೆಹೋವನ ಎಲ್ಲಾ ನಿಯಮಗಳನ್ನು
ಮತ್ತು ಆಜ್ಞೆಗಳನ್ನು ಜನರಿಗೆ ತಿಳಿಸಿದನು. ಆಗ ಜನರೆ
ಲ್ಲರೂ, ‘‘ಯೆಹೋವನ ಆಜ್ಞೆಗಳಿಗೆಲ್ಲಾ ನಾವು ವಿಧೇಯ
ರಾಗುವೆವು’’ ಎಂದು ಒಂದೇ ಸ್ವರದಿಂದ ಹೇಳಿದರು.

[4]ಆದ್ದರಿಂದ ಮೋಶೆ ಯೆಹೋವನ ಆಜ್ಞೆಗಳನ್ನೆಲ್ಲಾ
ಒಂದು ಸುರುಳಿಯಲ್ಲಿ ಬರೆದನು. ಮರುದಿನ
ಮುಂಜಾನೆ, ಅವನು ಬೇಗನೆ ಎದ್ದು ಬೆಟ್ಟದ ಕೆಳಭಾಗದ
ಹತ್ತಿರ, ಹನ್ನೆರಡು ಕುಲಗಳಿಗೆ ಒಂದೊಂದರಂತೆ ಹನ್ನೆ
ರಡು ಕಂಬಗಳುಳ್ಳ ಒಂದು ಯಜ್ಞವೇದಿಕೆಯನ್ನು ಕಟ್ಟಿ
ಸಿದನು. ಇಸ್ರೇಲರ ಹನ್ನೆರಡು ಕುಲಗಳಿಗೆ ಒಂದೊಂದ
ರಂತೆ ಹನ್ನೆರಡು ಕಲ್ಲುಗಳನ್ನು ನಿಲ್ಲಿಸಿದನು. [5]ಬಳಿಕ
ಮೋಶೆಯು ಯಜ್ಞಗಳನ್ನು ಸಮರ್ಪಿಸುವುದಕ್ಕೆ ಇಸ್ರೇಲರ
ಯೌವನಸ್ಥರನ್ನು ಕಳುಹಿಸಿದನು. ಅವರು ಯೆಹೋವ
ನಿಗೆ ಎತ್ತುಗಳನ್ನು ಸರ್ವಾಂಗಹೋಮಗಳಾಗಿಯೂ
ಸಮಾಧಾನ ಯಜ್ಞಗಳಾಗಿಯೂ ಅರ್ಪಿಸಿದರು.

[6]ಮೋಶೆಯು ಈ ಪಶುಗಳ ರಕ್ತವನ್ನು ತೆಗೆದುಕೊಂಡು
ಅದರಲ್ಲಿ ಅರ್ಧಭಾಗವನ್ನು ಬೋಗುಣಿಗಳಲ್ಲಿ ಹಾಕಿ
ದನು; ಉಳಿದ ಅರ್ಧಭಾಗವನ್ನು ಯಜ್ಞವೇದಿಕೆಯ
ಮೇಲೆ ಸುರಿದನು.

[7]ವಿಶೇಷ ಒಡಂಬಡಿಕೆಯಿಂದ ಬರೆಯಲ್ಪಟ್ಟಿದ್ದ
ಸುರುಳಿಯನ್ನು ಮೋಶೆಯು ಎಲ್ಲಾ ಜನರಿಗೆ ಕೇಳುವಂತೆ
ಓದಿದನು. ಆಗ ಜನರು, ‘‘ಯೆಹೋವನ ಆಜ್ಞೆಗಳನ್ನೆಲ್ಲ
ಅನುಸರಿಸಿ ಆತನಿಗೆ ವಿಧೇಯರಾಗಿರುತ್ತೇವೆ’’ ಅಂದರು.

[8]ಆಗ ಮೋಶೆ ಯಜ್ಞಗಳ ರಕ್ತದಿಂದ ತುಂಬಿದ
ಬೋಗುಣಿಯನ್ನು ತೆಗೆದುಕೊಂಡು ಅದರಲ್ಲಿದ್ದ
ರಕ್ತವನ್ನು ಜನರ ಮೇಲೆ ಚಿಮಿಕಿಸಿ, ‘‘ಈ ಸುರುಳಿಯ
ಲ್ಲಿರುವ ವಾಕ್ಯಗಳಿಗನುಸಾರವಾಗಿ ಯೆಹೋವನು ನಿಮ್ಮೊ
ಡನೆ ಒಂದು ವಿಶೇಷ ಒಡಂಬಡಿಕೆಯನ್ನು ಮಾಡಿಕೊಂಡಿ
ದ್ದಾನೆಂಬುದನ್ನು ಈ ರಕ್ತವು ಸೂಚಿಸುತ್ತದೆ’’ ಎಂದು
ಹೇಳಿದನು.

[9]ಬಳಿಕ ಮೋಶೆ, ಆರೋನ, ನಾದಾಬ, ಅಬೀಹೂ
ಮತ್ತು ಇಸ್ರೇಲರ ಎಪ್ಪತ್ತು ಮಂದಿ ಹಿರಿಯರು ಬೆಟ್ಟ
ವನ್ನೇರಿದರು. [10]ಈ ಜನರು ಇಸ್ರೇಲರ ಯೆಹೋವನನ್ನು
ನೋಡಿದರು. ದೇವರು ಆಕಾಶ ಮಂಡಲದಂತೆ
ಅತಿನಿರ್ಮಲವಾದ ಇಂದ್ರನೀಲಮಣಿಯ ನೆಲಗಟ್ಟಿನ
ಮೇಲೆ ನಿಂತುಕೊಂಡಿದ್ದನು!

[11]ಇಸ್ರೇಲರ ನಾಯಕರೆಲ್ಲರೂ ಯೆಹೋವನನ್ನು
ನೋಡಿದರು, ಆದರೆ ದೇವರು ಅವರನ್ನು ನಾಶಮಾಡ
ಲಿಲ್ಲ. ಅವರೆಲ್ಲರೂ ದೇವದರ್ಶನ ಮಾಡಿ ಅನ್ನಪಾನ
ಗಳನ್ನು ತೆಗೆದುಕೊಂಡರು.

### ಯೆಹೋವನ ನಿಬಂಧನೆಯನ್ನು ಪಡೆಯಲು ಮೋಶೆ ಹೋದದ್ದು

[12]ಯೆಹೋವನು ಮೋಶೆಗೆ, ‘‘ನೀನು ಬೆಟ್ಟವನ್ನು ಹತ್ತಿ
ಬಂದು ನನ್ನ ಬಳಿಯಲ್ಲಿರು. ನಾನು ನನ್ನ ಉಪದೇಶಗ
ಳನ್ನು ಮತ್ತು ಕಟ್ಟಳೆಗಳನ್ನು ಎರಡು ಕಲ್ಲಿನ ಹಲಗೆಗಳ
ಮೇಲೆ ಬರೆದಿದ್ದೇನೆ. ಈ ಉಪದೇಶಗಳನ್ನು ಮತ್ತು
ಕಟ್ಟಳೆಗಳನ್ನು ನೀನು ಜನರಿಗೆ ಬೋಧಿಸಬೇಕು. ನಾನು

---

**ಹೆದ್ದುಂಬಿ** ಕಣಜದ ಹುಳ. ದುಂಬಿಯಂತೆ ಕೊಂಡಿಯಿರುವ ಹುಳ. ಇದು ನಿಜವಾದ ಹೆದ್ದುಂಬಿಯಿರಬಹುದು ಅಥವಾ ಇದು ದೇವರ ದೂತನು ಅಥವಾ ಆತನ ಮಹಾಶಕ್ತಿಯೆಂಬ ಅರ್ಥ ಕೊಡಬಹುದು.

**ನಾದಾಬ್, ಅಬೀಹು** ಇವರು ಆರೋನನ ಮಕ್ಕಳು.

ಈ ಕಲ್ಲಿನ ಹಲಗೆಗಳನ್ನು ನಿನಗೆ ಕೊಡುವೆನು'' ಎಂದು
ಹೇಳಿದನು.
13ಆದ್ದರಿಂದ ಮೋಶೆಯು ತನ್ನ ಶಿಷ್ಯನಾದ
ಯೆಹೋಶುವನೊಡನೆ ಎದ್ದುನಿಂತು ದೇವರ ಬೆಟ್ಟದ
ಮೇಲಕ್ಕೆ ಹೋದನು. 14ಮೋಶೆಯು ಹಿರಿಯರಿಗೆ,
''ನಾವು ನಿಮ್ಮ ಬಳಿಗೆ ಹಿಂತಿರುಗಿ ಬರುವ ತನಕ ನೀವು
ಇಲ್ಲಿ ಕಾದುಕೊಂಡಿರಿ. ಆರೋನನು ಮತ್ತು ಹೂರನು
ನಿಮ್ಮ ಬಳಿಯಿದ್ದಾರೆ; ನಿಮ್ಮಲ್ಲಿ ಯಾರಿಗಾದರೂ ಸಮಸ್ಯೆ
ಯಿದ್ದರೆ ಅವರ ಬಳಿಗೆ ಹೋಗಲಿ'' ಎಂದು ಹೇಳಿದನು.

### ಮೋಶೆಯು ದೇವರನ್ನು ಭೇಟಿಯಾದದ್ದು

15ಬಳಿಕ ಮೋಶೆ ಬೆಟ್ಟದ ಮೇಲಕ್ಕೆ ಹೋದನು.
ಮೋಡವು ಬೆಟ್ಟವನ್ನು ಕವಿದುಕೊಂಡಿತ್ತು. 16ಸೀನಾಯಿ
ಬೆಟ್ಟದ ಮೇಲೆ ಯೆಹೋವನ ಮಹಿಮೆಯು ಇಳಿದು
ಬಂದಿತು. ಮೋಡವು ಆರುದಿನಗಳವರೆಗೆ ಬೆಟ್ಟವನ್ನು
ಕವಿದುಕೊಂಡಿತ್ತು. ಏಳನೆಯ ದಿನದಲ್ಲಿ, ಮೋಡದಿಂದ
ಯೆಹೋವನು ಮೋಶೆಯೊಡನೆ ಮಾತಾಡಿದನು.
17ಇಸ್ರೇಲರಿಗೆ ಯೆಹೋವನ ಮಹಿಮೆಯು ಬೆಟ್ಟದ ತುದಿ
ಯಲ್ಲಿ ಉರಿಯುವ ಬೆಂಕಿಯಂತೆ ಕಾಣುತ್ತಿತ್ತು.
18ಬಳಿಕ ಮೋಶೆಯು ಮೋಡದಲ್ಲಿ ಬೆಟ್ಟದ ಮೇಲೆ
ಇನ್ನೂ ಎತ್ತರಕ್ಕೆ ಹೋದನು. ಮೋಶೆಯು ಬೆಟ್ಟದಲ್ಲಿ
ಹಗಲಿರುಳು ನಲವತ್ತು ದಿವಸ ಇದ್ದನು.

### ಪವಿತ್ರ ವಸ್ತುಗಳಿಗಾಗಿ ಕಾಣಿಕೆಗಳು

25 ಯೆಹೋವನು ಮೋಶೆಗೆ, 2 ''ಇಸ್ರೇಲರು
ನನಗೆ ಕಾಣಿಕೆಗಳನ್ನು ತರಬೇಕೆಂದು ಅವರಿಗೆ
ಹೇಳು. ಪ್ರತಿಯೊಬ್ಬನು ನನಗೆ ಕೊಡುವುದರ ಬಗ್ಗೆ ತನ್ನ
ಹೃದಯದಲ್ಲಿ ತೀರ್ಮಾನಿಸಿಕೊಳ್ಳಬೇಕು. ಈ ಕಾಣಿಕೆ
ಗಳನ್ನು ನನಗಾಗಿ ಸ್ವೀಕರಿಸು. 3ಜನರಿಂದ ನೀನು ಸ್ವೀಕರಿಸ
ಬೇಕಾದ ವಸ್ತುಗಳ ಪಟ್ಟಿ ಇಲ್ಲಿದೆ. ಚಿನ್ನ, ಬೆಳ್ಳಿ, ತಾಮ್ರ,
4ನೀಲಿ, ನೇರಳೆ, ಕೆಂಪುದಾರ, ನಾರುಬಟ್ಟೆ, ಆಡು
ಕೂದಲಿನ ಬಟ್ಟೆ, 5ಕೆಂಪುಬಣ್ಣದ ಕುರಿದೊಗಲು, ಉತ್ತಮ
ತೊಗಲುಗಳು* ಜಾಲೀಮರ, 6ದೀಪಗಳಿಗೆ ಬೇಕಾದ
ಎಣ್ಣೆ, ಅಭಿಷೇಕತೈಲಕ್ಕೆ, ಪರಿಮಳಧೂಪಕ್ಕೆ ಬೇಕಾದ
ಸುಗಂಧದ್ರವ್ಯಗಳು, 7ಏಫೋದಿಗೆ* ದೈವನಿರ್ಣಯದ
ಪದಕಚೀಲಕ್ಕೆ ಬೇಕಾದ ಗೋಮೇದಿಕ ರತ್ನಗಳು ಮತ್ತು
ಇತರ ರತ್ನಗಳು'' ಎಂದು ಹೇಳಿದನು.

### ಪವಿತ್ರ ಗುಡಾರ

8ಇದಲ್ಲದೆ ದೇವರು ಮೋಶೆಗೆ, ''ಜನರು ನನಗೋಸ್ಕರ
ವಾಗಿ ಒಂದು ಪವಿತ್ರ ಗುಡಾರವನ್ನು ಕಟ್ಟಬೇಕು. ಆಗ
ನಾನು ಅವರ ನಡುವೆ ಅದರಲ್ಲಿ ವಾಸಿಸುವೆನು. 9ಪವಿತ್ರ
ಗುಡಾರ ಮತ್ತು ಅದರಲ್ಲಿರುವ ಪ್ರತಿಯೊಂದು ವಸ್ತುವೂ
ಹೇಗಿರಬೇಕೆಂದು ನಾನು ನಿನಗೆ ತೋರಿಸುವೆನು. ನಾನು
ನಿನಗೆ ತೋರಿಸುವ ಮಾದರಿಯ ಪ್ರಕಾರವೇ ಪ್ರತಿ
ಯೊಂದನ್ನು ಮಾಡು.

### ಒಡಂಬಡಿಕೆಯ ಪೆಟ್ಟಿಗೆ

10''ಜಾಲೀಮರದಿಂದ ಒಂದು ವಿಶೇಷ ಪೆಟ್ಟಿಗೆಯನ್ನು
ಮಾಡಿಸು. ಈ ಪವಿತ್ರ ಪೆಟ್ಟಿಗೆಯು ಎರಡೂವರೆ ಮೊಳ
ಉದ್ದ, ಒಂದೂವರೆ ಮೊಳ ಅಗಲ ಮತ್ತು ಒಂದೂವರೆ
ಮೊಳ ಎತ್ತರ ಇರಬೇಕು. 11ಅದರ ಹೊರಮೈಯನ್ನು
ಮತ್ತು ಒಳಮೈಯನ್ನು ಅಪ್ಪಟ ಬಂಗಾರದಿಂದ ಹೊದಿಸ
ಬೇಕು. ಪೆಟ್ಟಿಗೆಯ ಅಂಚುಗಳ ಸುತ್ತಲೂ ಚಿನ್ನದ ಗೋಟು
ಕಟ್ಟಿಸಬೇಕು. 12ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋಗಲು ಅನುಕೂಲವಾಗುವಂತೆ ನಾಲ್ಕು ಚಿನ್ನದ ಬಳೆ
ಗಳನ್ನು ಎರಕಹೊಯ್ಯಬೇಕು. ನಾಲ್ಕು ಮೂಲೆಗಳಲ್ಲಿ
ಅಂದರೆ ಒಂದೊಂದು ಕಡೆಯಲ್ಲಿ ಎರಡೆರಡು ಬಳೆಗಳನ್ನು
ಇಡಬೇಕು. 13ಬಳಿಕ ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋಗಲು ಅನುಕೂಲವಾಗುವಂತೆ ಕಂಬಗಳನ್ನು ಮಾಡ
ಬೇಕು. ಈ ಕಂಬಗಳನ್ನು ಜಾಲೀಮರದಿಂದ ಮಾಡಿ
ಬಂಗಾರದಿಂದ ಹೊದಿಸಬೇಕು. 14ಕಂಬಗಳನ್ನು ಪೆಟ್ಟಿಗೆ
ಕೊನೆಗಳಲ್ಲಿರುವ ಬಳೆಗಳಲ್ಲಿ ಸೇರಿಸಿ ಪೆಟ್ಟಿಗೆಯನ್ನು
ಹೊತ್ತುಕೊಂಡು ಹೋಗಬೇಕು. 15ಕಂಬಗಳು ಯಾವಾ
ಗಲೂ ಪೆಟ್ಟಿಗೆಯ ಬಳೆಗಳಲ್ಲಿ ಇರಬೇಕು. ಕಂಬಗಳನ್ನು
ಅವುಗಳಿಂದ ಹೊರಗೆ ತೆಗೆಯಬಾರದು.
16''ನಾನು ನಿನಗೆ ಕೊಡುವ ಆಜ್ಞಾಶಾಸನವನ್ನು ಅದ
ರೊಳಗೆ ಇಡು' ಎಂದು ಹೇಳಿದನು. 17ಇದಲ್ಲದೆ ದೇವರು
ಮೋಶೆಗೆ, ''ಅಪ್ಪಟ ಬಂಗಾರದಿಂದ ಕೃಪಾಸನವನ್ನು
ಮಾಡಿಸಬೇಕು. ಅದು ಎರಡುವರೆ ಮೊಳ ಉದ್ದವಾಗಿರ
ಬೇಕು. ಒಂದೂವರೆ ಮೊಳ ಅಗಲವಾಗಿರಬೇಕು.
18ಬಳಿಕ ಕೆರೂಬಿಯರ ಎರಡು ಬಂಗಾರದ ಆಕಾರ
ಗಳನ್ನು ಮಾಡಿಸಿ ಕೃಪಾಸನದ ಎರಡು ಕೊನೆಗಳಲ್ಲಿ ಇಡ
ಬೇಕು. 19ಕೃಪಾಸನದ ಒಂದು ಕೊನೆಯಲ್ಲಿ ಒಂದು
ಕೆರೂಬಿಯನ್ನೂ ಇನ್ನೊಂದು ಕೊನೆಯಲ್ಲಿ ಇನ್ನೊಂದು
ಕೆರೂಬಿಯನ್ನು ಜೋಡಿಸಬೇಕು. 20ಅವುಗಳ ರೆಕ್ಕೆಗಳು
ಆಕಾಶದ ಕಡೆಗೆ ಚಾಚಿರಬೇಕು; ಪೆಟ್ಟಿಗೆಯನ್ನು ಮುಚ್ಚಿ
ಕೊಂಡಿರಬೇಕು. ಅವುಗಳ ಮುಖಗಳು ಎದುರುಬದು
ರಾಗಿ ಕೃಪಾಸನವನ್ನು ನೋಡುತ್ತಿರಬೇಕು.
21''ನಾನು ನಿನಗೆ ಕೊಡುವ ಆಜ್ಞಾಶಾಸನವನ್ನು ಪೆಟ್ಟಿಗೆ
ಯಲ್ಲಿಡಬೇಕು; ಕೃಪಾಸನವನ್ನು ಆ ಪೆಟ್ಟಿಗೆಯ ಮೇಲಿಡ
ಬೇಕು. 22ನಾನು ನಿನಗೆ ದರ್ಶನ ಕೊಡುವಾಗ ಒಡಂಬ
ಡಿಕೆ ಪೆಟ್ಟಿಗೆಯ ಮೇಲಿರುವ ಕೆರೂಬಿಗಳ ಮಧ್ಯದಿಂದ

---

**ಉತ್ತಮ ತೊಗಲು** ಕಡಲು ಹಂದಿಯ ಅಥವಾ ಕಡಲು ದನದ ತೊಗಲು.

**ಏಫೋದ್** ಯಾಜಕರು ಧರಿಸುತ್ತಿದ್ದ ವಿಶೇಷ ಮೇಲಂಗಿ. ವಿಮೋಚನ
ಕಾಂಡ28:6-14 ನೋಡಿರಿ.

ನಿನ್ನ ಸಂಗಡ ಮಾತಾಡುವೆನು; ಇಸ್ರೇಲರಿಗೆ ಆಜ್ಞಾಪಿಸ
ಬೇಕಾದವುಗಳನ್ನು ನಿನಗೆ ತಿಳಿಸುವೆನು.

### ಮೇಜು

23‘‘ಜಾಲೀಮರದಿಂದ ಮೇಜನ್ನು ಮಾಡಬೇಕು.
ಮೇಜು ಎರಡು ಮೊಳ ಉದ್ದ, ಒಂದುಮೊಳ ಅಗಲ
ಮತ್ತು ಒಂದೂವರೆ ಮೊಳ ಎತ್ತರ ಇರಬೇಕು. 24ಶುದ್ಧ
ಬಂಗಾರದ ತಗಡುಗಳನ್ನು ಮೇಜಿಗೆ ಹೊದಿಸಿ ಅದರ
ಸುತ್ತಲೂ ಚಿನ್ನದ ಗೋಟನ್ನು ಕಟ್ಟಿಸಬೇಕು. 25ಬಳಿಕ
ಮೇಜಿನ ಸುತ್ತಲೂ ಮೂರು ಇಂಚು* ಅಗಲದ ಚೌಕ
ಟ್ಟನ್ನು ಮಾಡಿಸಿ ಅದಕ್ಕೂ ಚಿನ್ನದ ಗೋಟನ್ನು ಕಟ್ಟಿಸ
ಬೇಕು. 26ಬಳಿಕ ನಾಲ್ಕು ಚಿನ್ನದ ಬಳೆಗಳನ್ನು ಮಾಡಿಸಿ
ಮೇಜಿನ ನಾಲ್ಕು ಕಾಲುಗಳಿಗೆ ಜೋಡಿಸಬೇಕು. 27ಆ
ಬಳೆಗಳು ಅಡ್ಡಪಟ್ಟಿಗೆ ಜೋಡಿಸಿಕೊಂಡಿರಬೇಕು.
ಮೇಜನ್ನು ಹೊತ್ತುಕೊಂಡು ಹೋಗುವುದಕ್ಕೆ ಉಪಯೋ
ಗಿಸುವ ಕೋಲುಗಳನ್ನು ಅವುಗಳಲ್ಲಿ ಸೇರಿಸಬೇಕು. 28ಆ
ಕೋಲುಗಳನ್ನು ಜಾಲೀಮರದಿಂದ ಮಾಡಿಸಿ ಅವುಗಳಿಗೆ
ಚಿನ್ನದ ತಗಡನ್ನು ಹೊದಿಸಬೇಕು. 29ತಟ್ಟೆಗಳನ್ನು, ಚಮಚ
ಗಳನ್ನು, ಹೂಜಿಗಳನ್ನು ಮತ್ತು ಬೋಗುಣಿಗಳನ್ನು ಶುದ್ಧ
ಬಂಗಾರದಿಂದ ಮಾಡಬೇಕು. ಹೂಜಿಗಳನ್ನು ಮತ್ತು
ಬೋಗುಣಿಗಳನ್ನು ಪಾನದ್ರವ್ಯಗಳನ್ನು ಅರ್ಪಿಸಲು ಉಪ
ಯೋಗಿಸಬೇಕು. 30ನೈವೇದ್ಯದ ರೊಟ್ಟಿಗಳನ್ನು ಮೇಜಿನ
ಮೇಲೆ ನನ್ನ ಮುಂದೆ ಇಡು. ಅದು ಅಲ್ಲಿ ನನ್ನ ಮುಂದೆ
ಯಾವಾಗಲೂ ಇರಬೇಕು.

### ದೀಪಸ್ತಂಭ

31‘‘ಬಳಿಕ ಒಂದು ದೀಪಸ್ತಂಭವನ್ನು ಶುದ್ಧ ಬಂಗಾರ
ದಿಂದ ಮಾಡಿಸಬೇಕು. ಅದರ ಬುಡವನ್ನೂ ಕಂಬವನ್ನೂ
ಕಸೂತಿ ಕೆಲಸದಿಂದ ಮಾಡಿಸಬೇಕು. ಆ ದೀಪಸ್ತಂಭ
ವೆಲ್ಲಾ ಅಖಂಡವಾಗಿದ್ದು ಪುಷ್ಪಪಾತ್ರೆಗಳಂತೆಯೂ ಪುಷ್ಪ
ಗಳಂತೆಯೂ ಅಲಂಕಾರವಾಗಿ ಕೆತ್ತಲ್ಪಡಬೇಕು.

32 ‘‘ದೀಪಸ್ತಂಭಕ್ಕೆ ಒಂದೊಂದು ಪಾರ್ಶ್ವದಲ್ಲಿ ಮೂರು
ಮೂರು ಕೊಂಬೆಗಳಂತೆ ಆರು ಕೊಂಬೆಗಳಿರಬೇಕು.
33ಪ್ರತಿಯೊಂದು ಕೊಂಬೆಯಲ್ಲಿ ಬಾದಾಮಿ ಹೂವುಗ
ಳಂತಿರುವ ಮೂರು ಮೂರು ಪುಷ್ಪಾಲಂಕಾರಗಳಿರ
ಬೇಕು. ಒಂದೊಂದು ಅಲಂಕಾರಕ್ಕೆ ಒಂದು ಪುಷ್ಪ
ಪಾತ್ರೆಯೂ ಒಂದು ಪುಷ್ಪವೂ ಇರಬೇಕು. 34ದೀಪದ
ಸ್ತಂಭದಲ್ಲಿ ಪುಷ್ಪಪಾತ್ರೆಗಳೂ ಪುಷ್ಪಗಳೂ ಇರುವ
ಬಾದಾಮಿ ಹೂವುಗಳಂತೆ ನಾಲ್ಕು ಪುಷ್ಪಾಲಂಕಾರಗಳು
ಇರಬೇಕು. 35ಎರಡೆರಡು ಕೊಂಬೆಗಳು ಕವಲು ಒಡೆದಿ
ರುವ ಸ್ಥಳಗಳಲ್ಲೆಲ್ಲಾ ಒಂದೊಂದು ಪುಷ್ಪಪಾತ್ರೆಯಿರ
ಬೇಕು. 36ಪುಷ್ಪಪಾತ್ರೆಗಳನ್ನೂ ಕೊಂಬೆಗಳನ್ನೂ ಒಳ
ಗೊಂಡಿರುವ ದೀಪಸ್ತಂಭವು ಅಖಂಡವಾಗಿದ್ದು ಅಪ್ಪಟ
ಬಂಗಾರದಿಂದಲೂ ನಕಾಶಿ ಕೆಲಸದಿಂದಲೂ ಮಾಡಿದ್ದಾ
ಗಿರಬೇಕು. 37ಅದಕ್ಕೆ ಏಳು ಹಣತೆಗಳನ್ನು ಮಾಡಿಸಬೇಕು.
ಈ ಹಣತೆಗಳು ದೀಪಸ್ತಂಭದ ಮುಂದಿರುವ ಪ್ರದೇಶಕ್ಕೆ
ಬೆಳಕು ಕೊಡುವುದು. 38ಅದರ ಬತ್ತಿಗಳನ್ನು ಕತ್ತರಿಸುವ
ಕತ್ತರಿಯನ್ನು ಮತ್ತು ಹರಿವಾಣಗಳನ್ನು ಅಪ್ಪಟ ಬಂಗಾರ
ದಿಂದ ಮಾಡಿಸಬೇಕು. 39ದೀಪಸ್ತಂಭವನ್ನು ಮತ್ತು ಅದರ
ಎಲ್ಲಾ ಉಪಕರಣಗಳನ್ನು ಎಪ್ಪತ್ತೈದು ಪೌಂಡು* ಅಪ್ಪಟ
ಬಂಗಾರದಿಂದ ತಯಾರಿಸಬೇಕು. 40ನಾನು ನಿನಗೆ
ಬೆಟ್ಟದ ಮೇಲೆ ತೋರಿಸಿದ ಮಾದರಿಯಂತೆಯೆ ಪ್ರತಿ
ಯೊಂದನ್ನು ಮಾಡಬೇಕು’’ ಎಂದು ಹೇಳಿದನು.

### ಪವಿತ್ರ ಗುಡಾರ

26 ಯೆಹೋವನು ಮೋಶೆಗೆ, ‘‘ಪವಿತ್ರಗುಡಾರ
ವನ್ನು ಹತ್ತು ಪರದೆಗಳಿಂದ ಮಾಡಿಸಬೇಕು. ಈ
ಪರದೆಗಳನ್ನು ನಾರುಬಟ್ಟೆ ಮತ್ತು ನೀಲಿ, ನೇರಳೆ ಮತ್ತು
ಕೆಂಪುದಾರದಿಂದ ಮಾಡಿಸಬೇಕು. ನುರಿತ ಕೆಲಸಗಾರನು
ಪರದೆಗಳಲ್ಲಿ ರೆಕ್ಕೆಗಳಿರುವ ಕೆರೂಬಿಗಳ ಚಿತ್ರವನ್ನು
ಕಸೂತಿ ಹಾಕಬೇಕು. 2ಪ್ರತಿಯೊಂದು ಪರದೆಯ ಅಳ
ತೆಯು ಒಂದೇ ಆಗಿರಬೇಕು. ಪ್ರತಿ ಪರದೆಯು ಇಪ್ಪ
ತ್ತೆಂಟು ಮೊಳ ಉದ್ದವಾಗಿಯೂ ನಾಲ್ಕು ಮೊಳ ಅಗಲ
ವಾಗಿಯೂ ಇರಬೇಕು. 3ಪರದೆಗಳನ್ನು ಒಟ್ಟಾಗಿ
ಜೋಡಿಸಿ ಎರಡು ಭಾಗಗಳನ್ನಾಗಿ ಮಾಡಬೇಕು. ಒಂದು
ಭಾಗದಲ್ಲಿ ಐದು ಪರದೆಗಳನ್ನೂ ಇನ್ನೊಂದು ಭಾಗದಲ್ಲಿ
ಐದು ಪರದೆಗಳನ್ನೂ ಒಟ್ಟಾಗಿ ಜೋಡಿಸಬೇಕು. 4ಒಂದು
ಭಾಗದ ಕೊನೆಯ ಪರದೆಯ ಅಂಚಿನಲ್ಲಿ ಕುಣಿಕೆಗಳನ್ನು
ನೀಲಿ ಬಟ್ಟೆಯಿಂದ ಮಾಡಬೇಕು; ಇನ್ನೊಂದು ಭಾಗದ
ಕೊನೆಯ ಪರದೆಯ ಅಂಚಿನಲ್ಲಿಯೂ ಅದೇ ರೀತಿ ಮಾಡ
ಬೇಕು. 5ಒಂದು ಭಾಗದ ಕೊನೆಯ ಪರದೆಯ ಅಂಚಿನಲ್ಲಿ
ಐವತ್ತು ಕುಣಿಕೆಗಳು ಇರಬೇಕು. ಇನ್ನೊಂದು ಭಾಗದ
ಕೊನೆಯ ಪರದೆಯ ಅಂಚಿನಲ್ಲೂ ಐವತ್ತು ಕುಣಿಕೆಗಳು
ಇರಬೇಕು. 6ಬಳಿಕ ಪರದೆಗಳನ್ನು ಒಟ್ಟಾಗಿ ಜೋಡಿಸಲು
ಅನುಕೂಲವಾಗುವಂತೆ ಐವತ್ತು ಚಿನ್ನದಕೊಂಡಿಗಳನ್ನು
ಮಾಡಿಸಬೇಕು. ಹೀಗೆ ಒಂದೇ ಗುಡಾರವಾಗುವುದು.

7‘‘ಪವಿತ್ರಗುಡಾರದ ಮೇಲೆ ಹೊದಿಸುವುದಕ್ಕೆ
ಇನ್ನೊಂದು ಗುಡಾರವನ್ನು ಮಾಡಿಸಬೇಕು. ಈ ಗುಡಾರ
ವನ್ನು ಹನ್ನೊಂದು ಪರದೆಗಳಿಂದ ಮಾಡಿಸಬೇಕು. ಈ
ಪರದೆಗಳು ಆಡುಕೂದಲಿನಿಂದ ಮಾಡಲ್ಪಟ್ಟಿರಬೇಕು.
8ಈ ಎಲ್ಲಾ ಪರದೆಗಳ ಅಳತೆಯು ಒಂದೇ ಆಗಿರಬೇಕು.
ಅವು ಮೂವತ್ತು ಮೊಳ ಉದ್ದವಾಗಿಯೂ ನಾಲ್ಕು ಮೊಳ
ಅಗಲವಾಗಿಯೂ ಇರಬೇಕು. 9ಐದು ಪರದೆಗಳನ್ನು

---

**ಮೂರು ಇಂಚು** ಅಕ್ಷರಶಃ ಒಂದು ತೋಷಹ.

**ಎಪ್ಪತ್ತೈದು ಪೌಂಡು** ಅಕ್ಷರಶಃ ‘‘ಒಂದು ಪಿಕಾರ್.’’

ಒಟ್ಟಾಗಿ ಸೇರಿಸಿ ಒಂದು ಭಾಗವನ್ನಾಗಿ ಮಾಡು. ಬಳಿಕ
ಉಳಿದ ಆರು ಪರದೆಗಳನ್ನು ಒಟ್ಟಾಗಿ ಸೇರಿಸಿ ಇನ್ನೊಂದು
ಭಾಗವನ್ನಾಗಿ ಮಾಡು. ಆರನೇ ಪರದೆಯ ಅರ್ಧದಷ್ಟನ್ನು
ಡೇರೆಯ ಮುಂದುಗಡೆಯಲ್ಲಿ ಮಡಚಬೇಕು. 10ಒಂದು
ಭಾಗದ ಕೊನೇ ಪರದೆಯ ಕೆಳಗಿನ ಭಾಗದ ಅಂಚಿನಲ್ಲಿ
ಐವತ್ತು ಕುಣಿಕೆಗಳನ್ನು ಮಾಡಬೇಕು. ಇನ್ನೊಂದು
ಭಾಗದ ಕೊನೇ ಪರದೆಯ ಕೆಳಭಾಗದಲ್ಲಿಯೂ ಅದೇ
ರೀತಿಯಾಗಿ ಮಾಡಬೇಕು. 11ಬಳಿಕ ಪರದೆಗಳನ್ನು
ಒಟ್ಟಾಗಿ ಜೋಡಿಸಲು ಐವತ್ತು ತಾಮ್ರದ ಕೊಂಡಿಗಳನ್ನು
ಮಾಡಬೇಕು. ಹೀಗೆ ಒಂದೇ ಗುಡಾರವಾಗುವುದು. 12ಈ
ಗುಡಾರದ ಪರದೆಗಳಲ್ಲಿ ಉಳಿದ ಹೆಚ್ಚಿನ ಭಾಗಗಳನ್ನು
ಅಂದರೆ ಉಳಿದ ಅರ್ಧಭಾಗವನ್ನು ಪವಿತ್ರ ಗುಡಾರದ
ಹಿಂಬದಿಯಲ್ಲಿ ತೂಗುಹಾಕಬೇಕು. 13ಪಾರ್ಶ್ವಗಳಲ್ಲಿ ಈ
ಗುಡಾರದ ಪರದೆಗಳು, ಪವಿತ್ರ ಗುಡಾರದ ಕೆಳಗಣ
ಅಂಚುಗಳಿಂದ ಕೆಳಗೆ ಒಂದು ಮೊಳದಷ್ಟು ತೂಗಾಡು
ವವು. ಅದ್ದರಿಂದ ಈ ಡೇರೆಯು ಸಂಪೂರ್ಣವಾಗಿ ಪವಿತ್ರ
ಗುಡಾರವನ್ನು ಮುಚ್ಚಿಕೊಳ್ಳುವುದು. 14ಹೊರಗಿನ ಗುಡಾ
ರಕ್ಕೆ ಸರಿಹೊಂದುವ ಎರಡು ಹೊದಿಕೆಗಳನ್ನು ಮಾಡಿಸ
ಬೇಕು. ಒಂದು ಹೊದಿಕೆಯನ್ನು ಕೆಂಪುಬಣ್ಣದ ಕುರಿದೊ
ಗಲಿನ ಚರ್ಮದಿಂದ ಮಾಡಬೇಕು. ಇನ್ನೊಂದು ಹೊದಿಕೆ
ಯನ್ನು ಉತ್ತಮ ತೊಗಲಿನಿಂದ ಮಾಡಿಸಬೇಕು.

15‘‘ಪವಿತ್ರಗುಡಾರದ ಚೌಕಟ್ಟುಗಳನ್ನು ಜಾಲೀ ಮರ
ದಿಂದ ಮಾಡಿಸಬೇಕು. 16ಚೌಕಟ್ಟುಗಳು ಹತ್ತುಮೊಳ
ಎತ್ತರವಾಗಿಯೂ ಒಂದೂವರೆ ಮೊಳ ಅಗಲವಾಗಿಯೂ
ಇರಬೇಕು. 17ಪ್ರತಿ ಚೌಕಟ್ಟನ್ನು ಮಾಡುವುದಕ್ಕೆ ಎರಡು
ಕಡೆಯ ಕೋಲುಗಳನ್ನು ಅಡ್ಡಪಟ್ಟಿಗಳೊಂದಿಗೆ ಒಟ್ಟಾಗಿ
ಜೋಡಿಸಬೇಕು. ಪವಿತ್ರಗುಡಾರದ ಎಲ್ಲಾ ಚೌಕಟ್ಟು
ಗಳು ಒಂದೇ ರೀತಿಯಾಗಿರಬೇಕು. 18ಪವಿತ್ರಗುಡಾರದ
ದಕ್ಷಿಣ ಭಾಗಕ್ಕೆ ಇಪ್ಪತ್ತು ಚೌಕಟ್ಟುಗಳನ್ನು ಮಾಡಿಸ
ಬೇಕು. 19ಚೌಕಟ್ಟುಗಳಿಗೆ ನಲವತ್ತು ಬೆಳ್ಳಿಯ ಗದ್ದಿಗೇ
ಕಲ್ಲುಗಳನ್ನು ಮಾಡಿಸು. ಪ್ರತಿಯೊಂದು ಕಡೆಯ ಕಂಬಕ್ಕೆ
ಒಂದು ಗದ್ದಿಗೇಕಲ್ಲಿನಂತೆ ಪ್ರತಿಯೊಂದು ಚೌಕಟ್ಟಿಗೆ
ಎರಡು ಬೆಳ್ಳಿಯ ಗದ್ದಿಗೇಕಲ್ಲುಗಳು ಇರಬೇಕು. 20ಪವಿತ್ರ
ಗುಡಾರದ ಇನ್ನೊಂದು ಕಡೆಗೆ (ಉತ್ತರಭಾಗ) ಇನ್ನೂ
ಇಪ್ಪತ್ತು ಚೌಕಟ್ಟುಗಳನ್ನು ಮಾಡಿಸಬೇಕು. 21ಪ್ರತಿ
ಯೊಂದು ಚೌಕಟ್ಟಿನ ಕೆಳಗೆ ಎರಡು ಗದ್ದಿಗೇಕಲ್ಲುಗಳು
ಇರುವಂತೆ ಪ್ರತಿಯೊಂದು ಕಡೆಗೆ ನಲವತ್ತು ಬೆಳ್ಳಿಯ
ಗದ್ದಿಗೇಕಲ್ಲುಗಳನ್ನು ಮಾಡಿಸಬೇಕು. 22ಪವಿತ್ರ ಗುಡಾ
ರದ (ಪಶ್ಚಿಮ ದಿಕ್ಕಿನಲ್ಲಿ) ಇನ್ನೂ ಆರು ಚೌಕಟ್ಟುಗಳನ್ನು
ಮಾಡಿಸಬೇಕು. 23ಪವಿತ್ರಗುಡಾರದ ಹಿಂಭಾಗದಲ್ಲಿರುವ
ಮೂಲೆಗಳಿಗೆ ಎರಡು ಚೌಕಟ್ಟುಗಳನ್ನು ಮಾಡಿಸಬೇಕು.
24ಮೂಲೆಗಳಲ್ಲಿರುವ ಚೌಕಟ್ಟುಗಳು ಕೆಳಗಿನಭಾಗದಲ್ಲಿ
ಒಟ್ಟಾಗಿ ಜೋಡಿಸಿರಬೇಕು. ತುದಿಯಲ್ಲಿ ಒಂದು
ಬಳೆಯು ಚೌಕಟ್ಟುಗಳನ್ನು ಒಟ್ಟಾಗಿ ಹಿಡಿದುಕೊಂಡಿರು
ವುದು. ಎರಡು ಮೂಲೆಗಳಿಗೂ ಅದೇ ರೀತಿಯಾಗಿ
ಮಾಡಿಸಬೇಕು. 25ಗುಡಾರದ ಪಶ್ಚಿಮ ದಿಕ್ಕಿನ ಕೊನೆ
ಯಲ್ಲಿ ಒಟ್ಟು ಎಂಟು ಚೌಕಟ್ಟುಗಳಿರುವವು. ಪ್ರತಿ
ಚೌಕಟ್ಟಿನ ಕೆಳಗೆ ಎರಡು ಗದ್ದಿಗೇಕಲ್ಲುಗಳಂತೆ ಹದಿನಾರು
ಬೆಳ್ಳಿಯ ಗದ್ದಿಗೇಕಲ್ಲುಗಳಿರುವವು.

26‘‘ಜಾಲೀಮರದಿಂದ ಪವಿತ್ರಗುಡಾರದ ಚೌಕಟ್ಟು
ಗಳಿಗೆ ಅಗುಳಿಗಳನ್ನು ಮಾಡಿಸು. ಪವಿತ್ರಗುಡಾರದ
ಒಂದು ಭಾಗದಲ್ಲಿ ಐದು ಅಗುಳಿಗಳು ಇರಬೇಕು.
27ಪವಿತ್ರಗುಡಾರದ ಇನ್ನೊಂದು ಭಾಗದಲ್ಲಿ ಐದು
ಅಗುಳಿಗಳು ಇರಬೇಕು. ಪವಿತ್ರಗುಡಾರದ ಹಿಂಭಾಗದ
ಲ್ಲಿರುವ (ಪಶ್ಚಿಮಭಾಗ) ಚೌಕಟ್ಟುಗಳಿಗೆ ಐದು ಅಗುಳಿ
ಗಳು ಇರಬೇಕು. 28ಮಧ್ಯದಲ್ಲಿರುವ ಅಗುಳಿಯು ಚೌಕ
ಟ್ಟುಗಳ ಮೂಲಕ ಒಂದು ಕೊನೆಯಿಂದ ಇನ್ನೊಂದು
ಕೊನೆಯವರೆಗೂ ಹಾದುಹೋಗಬೇಕು.

29‘‘ಚೌಕಟ್ಟುಗಳಿಗೆ ಚಿನ್ನದ ತಗಡನ್ನು ಹೊದಿಸಬೇಕು;
ಅಗುಳಿಗಳನ್ನು ಹಿಡಿದುಕೊಂಡಿರಲು ಚೌಕಟ್ಟುಗಳಿಗೆ ಬಳೆ
ಗಳನ್ನು ಮಾಡಿಸಬೇಕು. ಮಾತ್ರವಲ್ಲದೆ ಅಗುಳಿಗಳನ್ನು
ಚಿನ್ನದಿಂದ ಹೊದಿಸಬೇಕು. 30ನಾನು ನಿನಗೆ ಬೆಟ್ಟದಲ್ಲಿ
ತೋರಿಸಿದ ಪ್ರಕಾರವೇ ಪವಿತ್ರಗುಡಾರವನ್ನು ಮಾಡಿಸ
ಬೇಕು.

## ಪವಿತ್ರಗುಡಾರದ ಒಳಭಾಗ

31‘‘ಪವಿತ್ರಗುಡಾರದ ಒಳಭಾಗವನ್ನು ವಿಂಗಡಿಸಲು
ಉತ್ತಮವಾದ ಹುರಿನಾರಿನ ಬಟ್ಟೆಯಿಂದ ಒಂದು ವಿಶೇಷ
ಪರದೆಯನ್ನು ಮಾಡಿಸಬೇಕು. ನೀಲಿ, ನೇರಳೆ ಮತ್ತು
ಕೆಂಪು ದಾರಗಳಿಂದ ಪರದೆಯ ಮೇಲೆ ಕೆರೂಬಿಗಳ
ಚಿತ್ರಗಳನ್ನು ಕಸೂತಿಹಾಕಿಸಬೇಕು. 32ಜಾಲೀಮರದಿಂದ
ನಾಲ್ಕು ಕಂಬಗಳನ್ನು ಮಾಡಿಸಿ ಅವುಗಳನ್ನು ಚಿನ್ನದಿಂದ
ಹೊದಿಸಬೇಕು. ನಾಲ್ಕು ಕಂಬಗಳ ಮೇಲೆ ಚಿನ್ನದಿಂದ
ಮಾಡಿದ ಕೊಂಡಿಗಳನ್ನು ಹಾಕಿಸಬೇಕು. ಕಂಬಗಳ ಕೆಳಗೆ
ಬೆಳ್ಳಿಯ ಗದ್ದಿಗೇಕಲ್ಲುಗಳನ್ನು ಹಾಕಿಸಬೇಕು. ಬಳಿಕ
ಚಿನ್ನದ ಕೊಂಡಿಗಳಲ್ಲಿ ಪರದೆಯನ್ನು ತೂಗುಹಾಕಿಸ
ಬೇಕು. 33ಚಿನ್ನದ ಬಳೆಗಳ ಕೆಳಗೆ ಪರದೆಯನ್ನು ಹಾಕಿಸ
ಬೇಕು; ಪರದೆಯ ಹಿಂಭಾಗದಲ್ಲಿ ಒಡಂಬಡಿಕೆಯ
ಪೆಟ್ಟಿಗೆಯನ್ನು ಇಡಬೇಕು. ಈ ಪರದೆಯು ಪವಿತ್ರ ಸ್ಥಳ
ವನ್ನು ಮಹಾಪವಿತ್ರದ ಸ್ಥಳದಿಂದ ಪ್ರತ್ಯೇಕಿಸುವುದು.
34ಮಹಾಪವಿತ್ರ ಸ್ಥಾನದಲ್ಲಿರುವ ಒಡಂಬಡಿಕೆಯ ಪೆಟ್ಟಿ
ಗೆಯ ಮೇಲೆ ಕೃಪಾಸನವನ್ನು ಇಡಬೇಕು.

35‘‘ಪರದೆಯ ಇನ್ನೊಂದು ಭಾಗದಲ್ಲಿ ನೀನು ಮಾಡಿ
ಸಿದ ವಿಶೇಷ ಮೇಜನ್ನು ಇಡಬೇಕು. ಮೇಜು ಪರಿಶುದ್ಧ

ಗುಡಾರದ ಉತ್ತರಭಾಗದಲ್ಲಿರಬೇಕು. ಬಳಿಕ ದೀಪ ಸ್ತಂಭವನ್ನು ದಕ್ಷಿಣ ಭಾಗದಲ್ಲಿಡಬೇಕು. ಇದು ಮೇಜಿನ ಎದುರಿಗೆ ಇರಬೇಕು.

### ಪವಿತ್ರ ಗುಡಾರದ ಬಾಗಿಲು

36''ಬಳಿಕ ಪವಿತ್ರ ಗುಡಾರದ ಪ್ರವೇಶಸ್ಥಳವನ್ನು ಮುಚ್ಚುವುದಕ್ಕೆ ಒಂದು ಪರದೆಯನ್ನು ಮಾಡಿಸಬೇಕು. ಈ ಪರದೆಯನ್ನು ನೀಲಿ, ನೇರಳೆ, ಕೆಂಪು ದಾರಗಳಿಂದ ಮತ್ತು ಶ್ರೇಷ್ಠ ನಾರುಬಟ್ಟೆಯಿಂದ ಮಾಡಿಸಿ ಅದರಲ್ಲಿ ಚಿತ್ರ ಗಳನ್ನು ಕಸೂತಿಹಾಕಿಸಬೇಕು. 37ಈ ಪರದೆಗೆ ಚಿನ್ನದ ಕೊಂಡಿಗಳನ್ನು ಮಾಡಿಸಬೇಕು. ಜಾಲೀಮರದಿಂದ ಐದು ಕಂಬಗಳನ್ನು ಮಾಡಿಸಿ ಅವುಗಳಿಗೆ ಚಿನ್ನದ ತಗಡನ್ನು ಹೊದಿಸಬೇಕು ಮತ್ತು ಈ ಕಂಬಗಳಿಗೆ ಐದು ತಾಮ್ರದ ಗದ್ದಿಗೇಕಲ್ಲುಗಳನ್ನು ಮಾಡಿಸಬೇಕು'' ಎಂದು ಹೇಳಿದನು.

### ಯಜ್ಞವೇದಿಕೆ

27 ಯೆಹೋವನು ಮೋಶೆಗೆ, ''ಜಾಲೀಮರದಿಂದ ಯಜ್ಞವೇದಿಕೆಯನ್ನು ಮಾಡಿಸಬೇಕು. ಈ ಯಜ್ಞವೇದಿಕೆಯು ಚಚ್ಚೌಕವಾಗಿರಬೇಕು. ಅದು ಐದು ಮೊಳ ಉದ್ದ, ಐದು ಮೊಳ ಅಗಲ ಮತ್ತು ಮೂರು ಮೊಳ ಎತ್ತರ ಇರಬೇಕು. 2ಈ ಯಜ್ಞವೇದಿಕೆಯ ನಾಲ್ಕು ಮೂಲೆ ಗಳಿಗೆ ನಾಲ್ಕು ಕೊಂಬುಗಳನ್ನು ಮಾಡಿಸಬೇಕು. ಪ್ರತಿ ಯೊಂದು ಕೊಂಬೂ ಯಜ್ಞವೇದಿಕೆಗೆ ಜೋಡಿಸಲ್ಪಟ್ಟಿರ ಬೇಕು. ಹೀಗೆ ಅವು ಯಜ್ಞವೇದಿಕೆಯ ಅವಿಭಾಜ್ಯ ಭಾಗ ವಾಗಿರಬೇಕು. ಬಳಿಕ ಯಜ್ಞವೇದಿಕೆಯನ್ನು ತಾಮ್ರದ ತಗಡಿ ನಿಂದ ಹೊದಿಸಬೇಕು.

3''ಯಜ್ಞವೇದಿಕೆಯ ಉಪಕರಣಗಳನ್ನೆಲ್ಲಾ ತಾಮ್ರ ದಿಂದ ಮಾಡಿಸಬೇಕು. ಬಟ್ಟಲುಗಳನ್ನು, ಸಲಿಕೆಗಳನ್ನು, ಬೋಗುಣಿಗಳನ್ನು, ಮುಳ್ಳುಗಳನ್ನು ಮತ್ತು ಅಗ್ಗಿಷ್ಟಿಕೆಗ ಳನ್ನು ಮಾಡಿಸಬೇಕು. ಯಜ್ಞವೇದಿಕೆಯಿಂದ ಬೂದಿ ಯನ್ನು ತೆಗೆದು ಇವುಗಳನ್ನು ಶುಚಿಗೊಳಿಸುವುದಕ್ಕೆ ಉಪ ಯೋಗಿಸಬೇಕು. 4ಯಜ್ಞವೇದಿಕೆಗೆ ಹೆಣಿಗೆ ಕೆಲಸದಿಂದ ತಾಮ್ರದ ಜಾಳಿಗೆ ಮಾಡಿಸಬೇಕು. ಈ ಜಾಳಿಗೆಯ ನಾಲ್ಕುಮೂಲೆಗಳಲ್ಲಿ ನಾಲ್ಕು ತಾಮ್ರದ ಬಳೆಗಳನ್ನು ಮಾಡಿಸಬೇಕು. 5ಆ ಜಾಳಿಗೆಯು ಯಜ್ಞವೇದಿಕೆಯ ಸುತ್ತ ಲಿರುವ ಕಟ್ಟೆಯ ಕೆಳಗೆ ಇದ್ದು ಯಜ್ಞವೇದಿಕೆಯ ಬುಡ ದಿಂದ ಅರ್ಧದಷ್ಟು ಮೇಲಕ್ಕೆ ಇರಬೇಕು.

6''ಯಜ್ಞವೇದಿಕೆಗೆ ಕೋಲುಗಳನ್ನು ಜಾಲೀಮರ ದಿಂದ ಮಾಡಿಸಿ ಅವುಗಳಿಗೆ ತಾಮ್ರದ ತಗಡನ್ನು ಹೊದಿಸ ಬೇಕು. 7ಯಜ್ಞವೇದಿಕೆಯ ಎರಡು ಕಡೆಗಳಲ್ಲಿರುವ ಬಳೆ ಗಳಲ್ಲಿ ಕೋಲುಗಳನ್ನು ಸೇರಿಸಬೇಕು. ಈ ಕೋಲುಗ ಳಿಂದ ಯಜ್ಞವೇದಿಕೆಯನ್ನು ಹೊತ್ತುಕೊಂಡು ಹೋಗ ಬೇಕು. 8ಯಜ್ಞವೇದಿಕೆಯ ಪಾರ್ಶ್ವಗಳನ್ನು ಹಲಗೆಗಳಿಂದ ಮಾಡಿಸಬೇಕು. ನಾನು ಬೆಟ್ಟದ ಮೇಲೆ ನಿನಗೆ ತೋರಿಸಿದ ಪ್ರಕಾರವೇ ಯಜ್ಞವೇದಿಕೆಯನ್ನು ಮಾಡಿಸಬೇಕು.

### ಪವಿತ್ರ ಗುಡಾರದ ಅಂಗಳ

9''ಪವಿತ್ರ ಗುಡಾರಕ್ಕೆ ಅಂಗಳವನ್ನು ಮಾಡಿಸಬೇಕು. ದಕ್ಷಿಣದಿಕ್ಕಿನಲ್ಲಿ ನೂರುಮೊಳ ಉದ್ದದ ಪರದೆಗಳ ಗೋಡೆಯಿರಬೇಕು. ಈ ಪರದೆಗಳನ್ನು ಉತ್ತಮ ನಾರು ಬಟ್ಟೆಯಿಂದ ಮಾಡಿಸಬೇಕು. 10ಇಪ್ಪತ್ತು ಕಂಬಗಳನ್ನು ಮತ್ತು ಆ ಕಂಬಗಳಿಗೆ ಇಪ್ಪತ್ತು ತಾಮ್ರದ ಗದ್ದಿಗೇ ಕಲ್ಲುಗಳನ್ನು ಮಾಡಿಸಬೇಕು. ಕಂಬಗಳಿಗೆ ಬೆಳ್ಳಿಯ ಕೊಂಡಿಗಳನ್ನು ಮತ್ತು ಪರದೆಯ ಕೋಲುಗಳಿಗೆ ಬೆಳ್ಳಿಯ ಕಂಬಿಗಳನ್ನು ಮಾಡಿಸಬೇಕು. 11ಉತ್ತರ ದಿಕ್ಕಿನಲ್ಲಿ ಸಹ ನೂರುಮೊಳ ಉದ್ದದ ಪರದೆಗಳ ಗೋಡೆಯಿರಬೇಕು. ಅದಕ್ಕೆ ಇಪ್ಪತ್ತು ಕಂಬಿಗಳು ಮತ್ತು ಇಪ್ಪತ್ತು ತಾಮ್ರದ ಗದ್ದಿಗೇಕಲ್ಲುಗಳು ಇರಬೇಕು. ಕಂಬಗಳ ಕೊಂಡಿಗಳನ್ನು ಮತ್ತು ಪರದೆಯ ಕಟ್ಟುಗಳನ್ನು ಬೆಳ್ಳಿಯಿಂದ ಮಾಡಿಸ ಬೇಕು.

12''ಪಶ್ಚಿಮದಿಕ್ಕಿನಲ್ಲಿ ಅಂಗಳದ ಅಗಲಕ್ಕೆ ಐವತ್ತು ಮೊಳ ಉದ್ದದ ಪರದೆಗಳೂ ಹತ್ತು ಕಂಬಗಳೂ ಮತ್ತು ಹತ್ತು ಗದ್ದಿಗೇಕಲ್ಲುಗಳೂ ಇರಬೇಕು. 13ಅಂಗಳದ ಪೂರ್ವ ದಿಕ್ಕಿನಲ್ಲಿ ಐವತ್ತು ಮೊಳ ಉದ್ದ ಇರಬೇಕು. 14ಈ ಪೂರ್ವ ದಿಕ್ಕಿನಲ್ಲಿ ಅಂಗಳದ ಪ್ರವೇಶದ್ವಾರವಿರುತ್ತದೆ. ಪ್ರವೇಶ ದ್ವಾರದ ಒಂದು ಕಡೆಯಲ್ಲಿ ಹದಿನೈದು ಮೊಳ ಉದ್ದದ ಪರದೆಗಳು, ಮೂರು ಕಂಬಗಳು ಮತ್ತು ಮೂರು ಗದ್ದಿಗೇ ಕಲ್ಲುಗಳು ಇರಬೇಕು. 15ಇನ್ನೊಂದು ಕಡೆಯಲ್ಲಿ ಹದಿ ನೈದು ಮೊಳ ಉದ್ದದ ಪರದೆಗಳು, ಮೂರು ಕಂಬಗಳು; ಮೂರು ಗದ್ದಿಗೇಕಲ್ಲುಗಳು ಇರಬೇಕು.

16''ಅಂಗಳದ ದ್ವಾರವನ್ನು ಮುಚ್ಚುವುದಕ್ಕೆ ಇಪ್ಪತ್ತು ಮೊಳ ಉದ್ದದ ಪರದೆಯನ್ನು ಮಾಡಿಸಬೇಕು. ಪರದೆ ಯನ್ನು ಉತ್ತಮನಾರಿನ ಬಟ್ಟೆಯಿಂದ ಮತ್ತು ನೀಲಿ, ನೇರಳೆ ಮತ್ತು ಕೆಂಪು ದಾರಗಳಿಂದ ಮಾಡಿಸಬೇಕು. ಆ ಪರದೆಯಲ್ಲಿ ಅಲಂಕೃತವಾದ ಚಿತ್ರಗಳನ್ನು ಬುಟೇದಾರಿ ಕೆಲಸದವರಿಂದ ಮಾಡಿಸಬೇಕು. ಆ ಪರದೆಗೆ ನಾಲ್ಕು ಕಂಬಗಳು ಮತ್ತು ನಾಲ್ಕು ಗದ್ದಿಗೇಕಲ್ಲುಗಳು ಇರಬೇಕು. 17ಅಂಗಳದ ಸುತ್ತಲಿರುವ ಕಂಬಗಳನ್ನೆಲ್ಲ ಬೆಳ್ಳಿಯ ಪರದೆ ಕೋಲುಗಳೊಡನೆ ಜೋಡಿಸಬೇಕು. ಕಂಬಗಳ ಕೊಂಡಿ ಗಳನ್ನು ಬೆಳ್ಳಿಯಿಂದಲೂ ಕಂಬಗಳ ಗದ್ದಿಗೇಕಲ್ಲುಗಳನ್ನು ತಾಮ್ರದಿಂದಲೂ ಮಾಡಿಸಬೇಕು. 18ಅಂಗಳವು ನೂರು ಮೊಳ ಉದ್ದ ಮತ್ತು ಐವತ್ತು ಮೊಳ ಅಗಲ ಇರಬೇಕು. ಅಂಗಳದ ಸುತ್ತಲಿರುವ ಪರದೆಗಳ ಗೋಡೆಯು ಐದು

ಮೊಳ ಅಡಿ ಎತ್ತರವಿರಬೇಕು. ಪರದೆಗಳನ್ನು ಉತ್ತಮ ನಾರುಬಟ್ಟೆಯಿಂದ ಮಾಡಿಸಬೇಕು. ಕಂಬಗಳ ಕೆಳಗಿರುವ ಗದ್ದಿಗೇಕಲ್ಲುಗಳನ್ನು ತಾಮ್ರದಿಂದ ಮಾಡಿಸಬೇಕು.
[19]ಪವಿತ್ರಗುಡಾರದ ಉಪಕರಣಗಳನ್ನೂ ಗುಡಾರದ ಗೂಟಗಳನ್ನೂ ಗುಡಾರದ ಸುತ್ತಲೂ ಇರುವ ಪರದೆಯ ಗೂಟಗಳನ್ನೂ ತಾಮ್ರದಿಂದ ಮಾಡಿಸಬೇಕು.

## ದೀಪದ ಎಣ್ಣೆ

[20]‘‘ಉತ್ತಮವಾದ ಆಲಿವ್ ಎಣ್ಣೆಯನ್ನು ತರಬೇಕೆಂದು ಇಸ್ರೇಲರಿಗೆ ಆಜ್ಞಾಪಿಸು. ಪ್ರತಿ ಸಾಯಂಕಾಲ ಉರಿಸುವ ದೀಪಕ್ಕೆ ಈ ಎಣ್ಣೆಯನ್ನು ಉಪಯೋಗಿಸು. [21]ಆರೋ
ನನು ಮತ್ತು ಅವನ ಗಂಡುಮಕ್ಕಳಿಗೆ ದೀಪವನ್ನು ನೋಡಿಕೊಳ್ಳುವ ಕೆಲಸವಿರುವುದು. ಅವರು ದೇವದರ್ಶನ ಗುಡಾರದ ಮೊದಲಿನ ಕೋಣೆಯೊಳಗೆ ಹೋಗುವರು. ಇದು ಎರಡು ಕೋಣೆಗಳನ್ನು ಪ್ರತ್ಯೇಕಿಸುವ ಪರದೆಯ ಹಿಂದೆ ಒಪ್ಪಂದವಿರುವ ಕೋಣೆಯ ಹೊರಗೆ ಇರುತ್ತದೆ. ಈ ಸ್ಥಳದಲ್ಲಿ ದೀಪವು ಯೆಹೋವನ ಮುಂದೆ ಸಾಯಂಕಾಲದಿಂದ ಮುಂಜಾನೆಯವರೆಗೆ ಯಾವಾಗಲೂ ಉರಿಯುತ್ತಿರುವಂತೆ ಅವರು ನೋಡಿಕೊಳ್ಳುವರು. ಇಸ್ರೇಲರು ಮತ್ತು ಅವರ ಸಂತತಿಯವರು ಈ ನಿಯಮಕ್ಕೆ ಶಾಶ್ವತವಾಗಿ ವಿಧೇಯರಾಗಬೇಕು’’ ಎಂದು ಹೇಳಿದನು.

## ಯಾಜಕರು ಧರಿಸಬೇಕಾದ ಬಟ್ಟೆಗಳು

28 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ: ‘‘ಇಸ್ರೇಲರಿಂದ ನಿನ್ನ ಬಳಿಗೆ ಬರಲು ನಿನ್ನ ಅಣ್ಣನಾದ ಆರೋನನಿಗೂ ಅವನ ಗಂಡು ಮಕ್ಕಳಾದ ನಾದಾಬ್, ಅಬೀಹು, ಎಲ್ಲಾಜಾರ್ ಮತ್ತು ಈತಾಮಾರ್ ಎಂಬುವರಿಗೂ ಹೇಳು. ಇವರು ಯಾಜಕರಾಗಿ ನನ್ನ ಸೇವೆ ಮಾಡುವರು.

[2]‘‘ನಿನ್ನ ಸಹೋದರನಾದ ಆರೋನನಿಗೆ ವಿಶೇಷ ಬಟ್ಟೆಗಳನ್ನು ಮಾಡಿಸು. ಈ ಬಟ್ಟೆಗಳು ಅವನಿಗೆ ಘನತೆಯನ್ನೂ ಗೌರವವನ್ನೂ ನೀಡುತ್ತವೆ. [3]ಈ ಬಟ್ಟೆಗಳನ್ನು ಮಾಡು
ವಂಥ ಕೆಲವು ನಿಪುಣರಿದ್ದಾರೆ. ನಾನು ಅವರಿಗೆ ವಿಶೇಷ ಜ್ಞಾನವನ್ನು ಕೊಟ್ಟಿದ್ದೇನೆ. ಆರೋನನಿಗೆ ಬೇಕಾದ ಬಟ್ಟೆಗಳನ್ನು ಮಾಡಲು ಅವರಿಗೆ ಹೇಳು. ಅವನು ವಿಶೇಷವಾದ ರೀತಿಯಲ್ಲಿ ನನ್ನ ಸೇವೆಮಾಡುತ್ತಾನೆಂದು ಈ ಬಟ್ಟೆಗಳು ತೋರಿಸುತ್ತವೆ. ಆಗ ಅವನು ಯಾಜಕನಾಗಿ ನನ್ನ ಸೇವೆ ಮಾಡಬಹುದು. [4]ಅವರು ಮಾಡತಕ್ಕ ಬಟ್ಟೆಗಳು ಯಾವು
ವೆಂದರೆ: ದೈವನಿರ್ಣಯಕ ಪದಕ,* ಏಫೋದು,* ನೀಲಿಯ ನಿಲುವಂಗಿ, ಹೆಣೆದ ಬಿಳಿಯ ನಿಲುವಂಗಿ, ಮುಂಡಾಸು ಮತ್ತು ನಡುಕಟ್ಟು. ನಿನ್ನ ಸಹೋದರನಾದ ಆರೋನನಿಗೂ ಅವನ ಗಂಡುಮಕ್ಕಳಿಗೂ ಈ ವಿಶೇಷ ಬಟ್ಟೆಗಳನ್ನು ಅವರು ಮಾಡಬೇಕು. ಆಗ ಆರೋನನೂ ಅವನ ಗಂಡು ಮಕ್ಕಳೂ ಯಾಜಕರಾಗಿ ನನ್ನ ಸೇವೆ ಮಾಡಬಹುದು. [5]ಚಿನ್ನದ ದಾರಗಳು, ನಾರುಬಟ್ಟೆ, ನೀಲಿ,
ನೇರಳೆ ಮತ್ತು ಕೆಂಪು ದಾರಗಳನ್ನು ಉಪಯೋಗಿಸಲು ಅವರಿಗೆ ಹೇಳು.

## ಏಫೋದು ಮತ್ತು ನಡುಕಟ್ಟು

[6]‘‘ಏಫೋದನ್ನು ಚಿನ್ನದ ದಾರಗಳು, ನಾರಿನಬಟ್ಟೆ, ನೀಲಿ, ನೇರಳೆ ಮತ್ತು ಕೆಂಪುದಾರಗಳನ್ನು ಉಪಯೋಗಿಸಿ ಚಾಣಕ್ಷತೆಯಿಂದ ಹೆಣೆದು ತಯಾರಿಸಬೇಕು.
[7]ಏಫೋದಿನ ಪ್ರತಿಭುಜದಲ್ಲಿ ಭುಜದ ಪಟ್ಟಿಯಿರಬೇಕು. ಭುಜದ ಈ ಪಟ್ಟಿಗಳು ಏಫೋದಿನ ಎರಡು ಕೊನೆಗಳಿಗೆ ಕಟ್ಟಿರಬೇಕು.

[8]‘‘ಇವರು ಏಫೋದಿಗೆ ಸೇರಿಸಲ್ಪಟ್ಟಿರುವ ನಡುಕಟ್ಟನ್ನು ಬಹಳ ಎಚ್ಚರಿಕೆಯಿಂದ ಹೆಣೆಯಬೇಕು. ಏಫೋದನ್ನು ತಯಾರಿಸಿದಂತೆಯೇ ಈ ನಡುಕಟ್ಟನ್ನು ತಯಾರಿಸಬೇಕು. ಚಿನ್ನದ ದಾರಗಳು, ನಾರುಬಟ್ಟೆ, ನೀಲಿ, ನೇರಳೆ ಮತ್ತು ಕೆಂಪುದಾರಗಳನ್ನು ಉಪಯೋಗಿಸಿ ಇದನ್ನು ಮಾಡಬೇಕು.

[9]‘‘ಎರಡು ಗೋಮೇಧಿಕ ರತ್ನಗಳನ್ನು ತೆಗೆದುಕೋ. ಈ ರತ್ನಗಳ ಮೇಲೆ ಇಸ್ರೇಲನ (ಯಾಕೋಬನ) ಹನ್ನೆರಡು ಗಂಡುಮಕ್ಕಳ ಹೆಸರನ್ನು ಬರೆಸು. [10]ಒಂದು ರತ್ನದ ಮೇಲೆ
ಆರು ಹೆಸರುಗಳನ್ನೂ ಇನ್ನೊಂದು ರತ್ನದ ಮೇಲೆ ಆರು ಹೆಸರುಗಳನ್ನೂ ಬರೆಸು. ಹಿರಿಮಗನಿಂದ ಹಿಡಿದು ಕಿರಿಮಗನವರೆಗೆ ಕ್ರಮಾನುಸಾರವಾಗಿ ಹೆಸರುಗಳನ್ನು ಬರೆಸು. [11]ಈ ಕಲ್ಲುಗಳ ಮೇಲೆ ಇಸ್ರೇಲನ ಗಂಡು ಮಕ್ಕಳ
ಹೆಸರನ್ನು ಕೆತ್ತಿಸು. ಒಬ್ಬ ಕೆಲಸಗಾರನು ಮುದ್ರೆಯನ್ನು ಮಾಡುವ ರೀತಿಯಲ್ಲಿ ಇದನ್ನು ಮಾಡಿಸು. ಚಿನ್ನದ ಕುಂದಣದಲ್ಲಿ ರತ್ನಗಳನ್ನಿಡು. [12]ಬಳಿಕ ಈ ಎರಡು ರತ್ನಗಳನ್ನು
ಏಫೋದಿನ ಪ್ರತಿಭುಜದ ಪಟ್ಟಿಯಲ್ಲಿಡು. ಆರೋನನು ಯೆಹೋವನ ಮುಂದೆ ನಿಲ್ಲುವಾಗ ಈ ವಿಶೇಷ ಅಂಗಿಯನ್ನು ಧರಿಸಿಕೊಂಡಿರುವನು. ಇಸ್ರೇಲನ ಗಂಡುಮಕ್ಕಳ ಹೆಸರುಗಳುಳ್ಳ ಎರಡು ರತ್ನಗಳು ಏಫೋದಿನ ಮೇಲಿರುತ್ತವೆ. ದೇವರು ಇಸ್ರೇಲರನ್ನು ಜ್ಞಾಪಿಸಿಕೊಳ್ಳುವಂತೆ ಈ ರತ್ನಗಳು ಮಾಡುವವು. [13]ಏಫೋದಿನಲ್ಲಿ ಕಲ್ಲುಗಳು ಬಿಗಿ
ಯಾಗಿ ಹಿಡಿದುಕೊಂಡಿರಲು ಉತ್ತಮ ಚಿನ್ನವನ್ನು ಉಪಯೋಗಿಸು. [14]ಹೆಣಿಗೆಕೆಲಸದಿಂದ ಶುದ್ಧಬಂಗಾರದ
ಎರಡು ಸರಪಣಿಗಳನ್ನು ಮಾಡಿಸಿ ಚಿನ್ನದ ಗೂಡುಗಳಿಗೆ ಬಿಗಿಯಾಗಿ ಸಿಕ್ಕಿಸಬೇಕು.

---

**ದೈವನಿರ್ಣಯದ ಪದಕ** ಮಹಾಯಾಜಕರ ಎದೆಯ ಮೇಲ್ಭಾಗದಲ್ಲಿ ಕಟ್ಟಲಾಗುತ್ತಿದ್ದ ಬಟ್ಟೆ. ಇದು ಗಲ್ಲಪಟ್ಟಿಯಂತಿರುತ್ತಿತ್ತು.

**ಏಫೋದು** ಯಾಜಕರ ವಿಶೇಷವಾದ ಮೇಲಂಗಿ.

## ದೈವ ನಿರ್ಣಯದ ಪದಕ

[15]‘‘ಮಹಾಯಾಜಕನಿಗೆ ದೈವ ನಿರ್ಣಯದ ಪದಕವನ್ನು
ಮಾಡಿಸು. ಏಫೋದನ್ನು ಮಾಡಿಸಿದಂತೆ ನಿಪುಣರಾದ
ಕೆಲಸಗಾರರಿಂದ ಇದನ್ನು ಮಾಡಿಸಬೇಕು. ಚಿನ್ನದ ದಾರ
ಗಳು ಉತ್ಕೃಷ್ಟವಾದ ನಾರುಬಟ್ಟೆ, ನೀಲಿ, ನೇರಳೆ ಮತ್ತು
ಕೆಂಪುದಾರಗಳನ್ನು ಉಪಯೋಗಿಸಿ ಇದನ್ನು ಮಾಡ
ಬೇಕು. [16]ಅದು ಚಚ್ಚೌಕವಾಗಿದ್ದು ಒಂಭತ್ತು ಇಂಚು
ಉದ್ದವಾಗಿಯೂ ಒಂಭತ್ತು ಇಂಚು ಅಗಲವಾಗಿಯೂ
ಇರಬೇಕು. [17]ಅದರ ಮೇಲೆ ಅಂದವಾದ ರತ್ನಗಳನ್ನು
ನಾಲ್ಕು ಸಾಲುಗಳಾಗಿ ಹಾಕಿಸಬೇಕು. ರತ್ನಗಳ ಮೊದಲಿನ
ಸಾಲಿನಲ್ಲಿ ಮಾಣಿಕ್ಯ, ಪುಷ್ಪರಾಗ, ಸ್ಫಟಿಕಗಳಿರಬೇಕು.
[18]ಎರಡನೆಯ ಸಾಲಿನಲ್ಲಿ ಕೆಂಪರಲು, ನೀಲಪಚ್ಚೆಗಳಿರ
ಬೇಕು. [19]ಮೂರನೆಯ ಸಾಲಿನಲ್ಲಿ ಸುವರ್ಣರತ್ನ,
ಗೋಮೇಧಿಕ ಮತ್ತು ಧೂಮ್ರಮಣಿಗಳಿರಬೇಕು.
[20]ನಾಲ್ಕನೆಯ ಸಾಲಿನಲ್ಲಿ ಪೀತರತ್ನ, ಗೋಮೇಧಿಕರತ್ನ,
ವೈಡೂರ್ಯಗಳಿರಬೇಕು. ಈ ಎಲ್ಲಾ ರತ್ನಗಳನ್ನು ಚಿನ್ನದ
ಜವೆಯ ಕಲ್ಲುಗಳಲ್ಲಿ ಸೇರಿಸಬೇಕು. [21]ಇಸ್ರೇಲನ
(ಯಾಕೋಬ) ಗಂಡುಮಕ್ಕಳಲ್ಲಿ ಪ್ರತಿಯೊಬ್ಬನಿಗೆ
ಒಂದೊಂದು ರತ್ನದಂತೆ ದೈವ ನಿರ್ಣಯ ಪದಕದಲ್ಲಿ ಹನ್ನೆ
ರಡು ರತ್ನಗಳಿರಬೇಕು. ಪ್ರತಿಯೊಂದು ಕಲ್ಲುಗಳಲ್ಲಿ
ಇಸ್ರೇಲನ ಗಂಡುಮಕ್ಕಳಲ್ಲಿ ಒಬ್ಬೊಬ್ಬರ ಹೆಸರನ್ನು ಬರೆಸ
ಬೇಕು. ಒಬ್ಬ ಕೆಲಸಗಾರನು ಮುದ್ರೆಯನ್ನು ಕೆತ್ತುವಂತೆ
ಈ ಹೆಸರುಗಳನ್ನು ಪ್ರತಿ ರತ್ನದ ಮೇಲೆ ಕೆತ್ತಿಸಬೇಕು.

[22]‘‘ದೈವನಿರ್ಣಯಪದಕದಲ್ಲಿ ಶುದ್ಧಬಂಗಾರದ ಸರ
ಪಣಿಗಳನ್ನು ಮಾಡಿಸು. ಈ ಸರಪಣಿಗಳು ಹುರಿಗಳಂತಿ
ರುವ ಹಗ್ಗದಂತೆ ಇರಬೇಕು. [23]ಬಂಗಾರದ ಎರಡು ಬಳೆ
ಗಳನ್ನು ಮಾಡಿಸಿ ಅದರ ಎರಡು ಕೊನೆಗಳಲ್ಲಿ ಸಿಕ್ಕಿಸ
ಬೇಕು. [24]ಅದರ ಕೊನೆಯಲ್ಲಿರುವ ಎರಡು ಬಳೆಗಳ
ಮೂಲಕ ಚಿನ್ನದ ಎರಡು ಸರಪಣಿಗಳನ್ನು ಸಿಕ್ಕಿಸಬೇಕು.
[25]ಚಿನ್ನದ ಸರಪಣಿಗಳ ಇನ್ನೊಂದು ಕೊನೆಗಳನ್ನು ಎರಡು
ಪಟ್ಟಿಗಳಿಗೆ ಬಿಗಿಯಾಗಿ ಕಟ್ಟಿಸಬೇಕು. ಇದು ಮುಂಬದಿ
ಯಲ್ಲಿರುವ ಏಫೋದಿನ ಎರಡು ಭುಜದ ಪಟ್ಟಿಗಳಿಗೆ ಬಿಗಿ
ಯಾಗಿ ಹಿಡಿದುಕೊಂಡಿರುವಂತೆ ಮಾಡುವುದು. [26]ಇನ್ನೂ
ಎರಡು ಚಿನ್ನದ ಬಳೆಗಳನ್ನು ಮಾಡಿಸಿ, ಅವುಗಳನ್ನು
ದೈವನಿರ್ಣಯದ ಪದಕದ ಬೇರೆ ಎರಡು ಕೊನೆಗಳಿಗೆ
ಸಿಕ್ಕಿಸು. ಇದು ದೇವ್ಯ ನಿರ್ಣಯದ ಪದಕದ ಒಳಗಣ ಅಂಚಿ
ನಲ್ಲಿರುವುದು. [27]ಇನ್ನೆರಡು ಚಿನ್ನದ ಬಳೆಗಳನ್ನು ಮಾಡಿಸಿ
ಅವುಗಳನ್ನು ಏಫೋದಿನ ಭುಜಪಟ್ಟಿಗಳ ಮುಂಭಾಗದ
ಕೆಳಗೆ ಸಿಕ್ಕಿಸು. ಈ ಚಿನ್ನದ ಬಳೆಗಳನ್ನು ಏಫೋದಿನ ನಡು
ಕಟ್ಟಿನ ಮೇಲ್ಗಡೆ ಇರಿಸು. [28]ದೈವನಿರ್ಣಯದ ಪದಕದ
ಬಳೆಗಳನ್ನು ಏಫೋದಿನ ಬಳೆಗಳಿಗೆ ಜೋಡಿಸಲು ನೀಲಿ
ದಾರವನ್ನು ಉಪಯೋಗಿಸು. ಈ ರೀತಿಯಲ್ಲಿ ದೈವನಿರ್ಣ
ಯದ ಪದಕವು ನಡುಕಟ್ಟಿಗೆ ಹತ್ತಿರವಾಗಿದ್ದು ಏಫೋದಿಗೆ
ಬಿಗಿಯಾಗಿ ಅಂಟಿಕೊಂಡಿರುವುದು.

[29]‘‘ಆರೋನನು ಪವಿತ್ರಸ್ಥಳವನ್ನು ಪ್ರವೇಶಿಸುವಾಗ,
ದೈವನಿರ್ಣಯದ ಪದಕವನ್ನು ಧರಿಸಿಕೊಳ್ಳಬೇಕು. ಈ
ರೀತಿ ಎದೆಯ ಮೇಲೆ ಇಸ್ರೇಲನ ಗಂಡುಮಕ್ಕಳ ಹೆಸರುಗ
ಳಿರಬೇಕು. ಅವನು ನ್ಯಾಯತೀರಿಸಲು ಧರಿಸಿಕೊಂಡಿ
ರುವ ದೈವನಿರ್ಣಯದ ಪದಕದ ಮೇಲೆ ಈ ಹೆಸರುಗಳಿ
ರುತ್ತವೆ. ಈ ರೀತಿಯಲ್ಲಿ ಇಸ್ರೇಲನ ಹನ್ನೆರಡು ಮಂದಿ
ಗಂಡುಮಕ್ಕಳನ್ನು ಯೆಹೋವನಿಗೆ ಯಾವಾಗಲೂ
ಜ್ಞಾಪಿಸಲಾಗುವುದು. [30]ದೈವನಿರ್ಣಯದ ಪದಕದೊಳಗೆ
ಊರೀಮ್ ಮತ್ತು ತುಮ್ಮೀಮ್* ಎಂಬ ವಸ್ತುಗಳನ್ನು
ಇಡು. ಆರೋನನು ಯೆಹೋವನ ಮುಂದೆ ಹೋಗು
ವಾಗ ಅವುಗಳು ಅವನ ಎದೆಯ ಮೇಲಿರುವವು. ಹೀಗೆ
ಆರೋನನು ಯೆಹೋವನ ಮುಂದೆ ನಿಲ್ಲುವಾಗಲೆಲ್ಲಾ,
ಜನರಿಗೆ ತೀರ್ಪು ನೀಡತಕ್ಕದ್ದನ್ನು ಯಾವಾಗಲೂ ತನ್ನ
ಎದೆಯ ಮೇಲೆ ಹೊತ್ತುಕೊಂಡಿರುವನು.

## ಯಾಜಕರ ಇತರ ಬಟ್ಟೆಗಳು

[31]‘‘ಏಫೋದಿನ ಒಳಗೆ ಹಾಕಿಕೊಳ್ಳಲು ಒಂದು ನಿಲು
ವಂಗಿಯನ್ನು ನೀಲಿಬಟ್ಟೆಯಿಂದ ಮಾಡಿಸಬೇಕು. [32]ತಲೆ
ಯನ್ನು ತೂರಿಸುವುದಕ್ಕೆ ಮಧ್ಯದಲ್ಲಿ ಒಂದು ಸಂದು
ಮಾಡಿಸು. ಈ ಸಂದಿನ ಸುತ್ತಲೂ ಹೆಣೆದ ಬಟ್ಟೆಯನ್ನು
ಹೊಲಿಸು. ಈ ಬಟ್ಟೆಯು ಸಂದು ಹರಿದುಹೋಗದಂತೆ
ಕಾಪಾಡುವುದು. [33]ಬಟ್ಟೆಯ ಅಂಚಿನ ಸುತ್ತಲೂ ದಾಳಿಂಬೆ
ಹಣ್ಣುಗಳನ್ನು ಮಾಡಲು ನೀಲಿ, ನೇರಳೆ ಮತ್ತು
ಕೆಂಪುದಾರಗಳನ್ನು ಉಪಯೋಗಿಸಬೇಕು. ಆ ದಾಳಿಂಬೆ
ಹಣ್ಣಿನ ಚೆಂಡುಗಳನ್ನು ನಿಲುವಂಗಿಯ ಕೆಳಅಂಚಿನಲ್ಲಿ
ಸುತ್ತಲೂ ನೇತಾಡುವಂತೆ ಸಿಕ್ಕಿಸಬೇಕು. ದಾಳಿಂಬೆ ಹಣ್ಣಿನ
ಚೆಂಡುಗಳ ನಡುವೆ ಚಿನ್ನದ ಗೆಜ್ಜೆಗಳನ್ನು ಸಿಕ್ಕಿಸಬೇಕು.
[34]ಹೀಗೆ ನಿಲುವಂಗಿಯ ಕೆಳಅಂಚಿನಲ್ಲಿ ಸುತ್ತಲೂ ಗೆಜ್ಜೆ
ಗಳು ಮತ್ತು ದಾಳಿಂಬೆ ಹಣ್ಣುಗಳು ಇರಬೇಕು. ಪ್ರತಿ
ಎರಡು ದಾಳಿಂಬೆ ಹಣ್ಣಿನ ನಡುವೆ ಗೆಜ್ಜೆ ಇರಬೇಕು.
[35]ಆರೋನನು ಯಾಜಕನಾಗಿ ಸೇವೆಮಾಡುವಾಗ ಈ
ನಿಲುವಂಗಿಯನ್ನು ಧರಿಸಿಕೊಂಡಿರುವನು. ಯೆಹೋವನ
ಮುಂದೆ ನಿಲ್ಲುವುದಕ್ಕೆ ಆರೋನನು ಪವಿತ್ರಸ್ಥಳವನ್ನು
ಪ್ರವೇಶಿಸುವಾಗ ಗೆಜ್ಜೆಗಳು ಶಬ್ದ ಮಾಡುತ್ತಿರುತ್ತವೆ.
ಅವನು ಪವಿತ್ರಸ್ಥಳವನ್ನು ಬಿಡುವಾಗಲೂ ಗೆಜ್ಜೆಗಳು ಶಬ್ದ
ಮಾಡುತ್ತಿರುತ್ತವೆ. ಹೀಗಾಗಿ ಆರೋನನು
ಸಾಯುವುದಿಲ್ಲ.

[36]‘‘ಶುದ್ಧಬಂಗಾರದ ಪಟ್ಟಿಯನ್ನು ಮಾಡಿಸಿ ಮುದ್ರೆ
ಯನ್ನು ಕೆತ್ತುವ ರೀತಿಯಲ್ಲಿ ‘‘ಯೆಹೋವನಿಗೆ ಮೀಸಲು’’

---

**ಊರೀಮ್ ಮತ್ತು ತುಮ್ಮೀಮ್** ಪ್ರಶ್ನೆಗಳಿಗೆ ದೇವರ ಉತ್ತರವನ್ನು ತಿಳಿಯಲು ಯಾಜಕರು ಇದನ್ನು ಉಪಯೋಗಿಸುತ್ತಿದ್ದರು.

ಎಂಬ ಮಾತುಗಳನ್ನು ಚಿನ್ನದಲ್ಲಿ ಕೆತ್ತಿಸಬೇಕು. 37ಚಿನ್ನದ
ಪಟ್ಟಿಯನ್ನು ನೀಲಿದಾರಕ್ಕೆ ಬಿಗಿಯಾಗಿ ಕಟ್ಟಿಸಬೇಕು.
ನೀಲಿದಾರವನ್ನು ಮುಂಡಾಸದ ಸುತ್ತಲೂ ಅದರಲ್ಲಿ ಕೆತ್ತಿಸ
ಬೇಕು. ಚಿನ್ನದ ಪಟ್ಟಿಯು ಮುಂಡಾಸದ ಮುಂಭಾಗದಲ್ಲಿ
ರಬೇಕು. 38ಆರೋನನು ಇದನ್ನು ತನ್ನ ಹಣೆಯ ಮೇಲೆ
ಧರಿಸಿಕೊಳ್ಳುವನು. ಹೀಗೆ, ಇಸ್ರೇಲರು ಅರ್ಪಿಸಿದ ಕಾಣಿಕೆ
ಗಳಲ್ಲಿ ದೋಷವೇನಾದರೂ ಇದ್ದರೆ ಅವನು ಅದನ್ನು ತನ್ನ
ಮೇಲೆ ತೆಗೆದುಕೊಂಡು ತಾನೇ ಅದನ್ನು ವಹಿಸಿ
ಕೊಳ್ಳುವನು. ಇವು ಜನರು ಯೆಹೋವನಿಗೆ ಸಮರ್ಪಿ
ಸುವ ಕಾಣಿಕೆಗಳಾಗಿವೆ. ಜನರ ಕಾಣಿಕೆಗಳನ್ನು
ಯೆಹೋವನು ಅಂಗೀಕರಿಸುವಂತೆ ಆರೋನನು ಇದನ್ನು
ಯಾವಾಗಲೂ ತನ್ನ ಶಿರದಲ್ಲಿ ಧರಿಸಿಕೊಂಡಿರುವನು.

39‘‘ಹೆಣೆದ ಅಂಗಿಯನ್ನು ಮತ್ತು ಮುಂಡಾಸವನ್ನು
ಮಾಡಲು ಉತ್ಕೃಷ್ಟವಾದ ನಾರಿನ ಬಟ್ಟೆಯನ್ನು ಉಪ
ಯೋಗಿಸು. ನಡುಕಟ್ಟನ್ನು ಬುಟ್ಟೇದಾರಿ ಕೆಲಸದಿಂದ
ಮಾಡಿಸಬೇಕು. 40ಆರೋನನ ಗಂಡುಮಕ್ಕಳಿಗೂ ಅಂಗಿ
ಗಳನ್ನು, ನಡುಕಟ್ಟುಗಳನ್ನು ಮತ್ತು ಟೊಪ್ಪಿಗೆಗಳನ್ನು
ಮಾಡಿಸು. ಇವು ಅವರಿಗೆ ಘನತೆ ಮತ್ತು ಗೌರವಗಳನ್ನು
ಕೊಡುತ್ತವೆ.

41ನಿನ್ನ ಸಹೋದರನಾದ ಆರೋನನಿಗೆ ಮತ್ತು ಅವನ
ಗಂಡುಮಕ್ಕಳಿಗೆ ಬಟ್ಟೆಗಳನ್ನು ತೊಡಿಸು. ಬಳಿಕ ಅವರನ್ನು
ಯಾಜಕರನ್ನಾಗಿ ಮಾಡಲು ವಿಶೇಷ ತೈಲದಿಂದ ಅಭಿ
ಷೇಕಿಸು. ಇದು ಅವರನ್ನು ಪ್ರತಿಷ್ಠಿಸುವುದು ಮತ್ತು ಪವಿತ್ರ
ರನ್ನಾಗಿ ಮಾಡುವುದು. ಅವರು ಯಾಜಕರಾಗಿ ನನ್ನ ಸೇವೆ
ಮಾಡುವರು.

42‘‘ಯಾಜಕರಿಗೆ ಒಳಗಿನ ಉಡುಪುಗಳನ್ನು ಮಾಡಲು
ನಾರುಬಟ್ಟೆಯನ್ನು ಉಪಯೋಗಿಸು. ಈ ಒಳಗಿನ
ಉಡುಪುಗಳು ಅವರನ್ನು ಸೊಂಟದಿಂದ ತೊಡೆಯವರೆಗೆ
ಮುಚ್ಚುವುದು. 43ಆರೋನನು ಮತ್ತು ಅವನ ಗಂಡು
ಮಕ್ಕಳು ದೇವದರ್ಶನ ಗುಡಾರದೊಳಗೆ ಪ್ರವೇಶಿಸು
ವಾಗಲೆಲ್ಲಾ ಈ ಉಡುಪುಗಳನ್ನು ಧರಿಸಿಕೊಳ್ಳಬೇಕು.
ಪವಿತ್ರಸ್ಥಳದಲ್ಲಿ ಯಾಜಕರಾಗಿ ಸೇವೆಮಾಡಲು ಯಜ್ಞ
ವೇದಿಕೆಯ ಬಳಿಗೆ ಬರುವಾಗ ಅವರು ಈ ಬಟ್ಟೆಗಳನ್ನು
ಧರಿಸಿಕೊಂಡಿರಬೇಕು. ಅವರು ಈ ಉಡುಪುಗಳನ್ನು
ಧರಿಸಿಕೊಳ್ಳದಿದ್ದರೆ, ದೋಷಿಗಳಾಗಿ ಸಾಯುವರು. ಇವು
ಗಳೆಲ್ಲಾ ಆರೋನನಿಗೂ ಅವನ ನಂತರ ಅವನ ಕುಟುಂಬ
ಸ್ಥರೆಲ್ಲರಿಗೂ ಶಾಶ್ವತವಾದ ಕಟ್ಟಳೆಯಾಗಿವೆ.’’

## ಯಾಜಕರನ್ನು ನೇಮಿಸುವ ಆಚಾರವಿಧಿ

29 ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ: ‘‘ಆರೋನನು ಮತ್ತು ಅವನ ಗಂಡು
ಮಕ್ಕಳು ಅಭಿಷೇಕಿಸಲ್ಪಟ್ಟ ಮತ್ತು ಪ್ರತ್ಯೇಕಿಸಲ್ಪಟ್ಟ
ಯಾಜಕರಾಗಿ ವಿಶೇಷವಾದ ರೀತಿಯಲ್ಲಿ ನನ್ನ ಸೇವೆ
ಮಾಡಲು ಅವರು ಮಾಡತಕ್ಕದ್ದೇನೆಂಬುದನ್ನು ನಾನೀಗ
ಹೇಳುವೆನು. ಯಾವ ಅಂಗದೋಷವಿಲ್ಲದ ಒಂದು
ಹೋರಿಮರಿಯನ್ನು ಮತ್ತು ಎರಡು ಆಡುಮರಿಗಳನ್ನು
ತೆಗೆದುಕೊ. 2ಬಳಿಕ ಹುಳಿಯಿಲ್ಲದ ರೊಟ್ಟಿಯನ್ನೂ
ಆಲಿವ್ ಎಣ್ಣೆ ಮಿಶ್ರವಾದ ಹುಳಿಯಿಲ್ಲದ ಹೋಳಿಗೆಗ
ಳನ್ನೂ ಎಣ್ಣೆ ಹಾಕಿದ ತೆಳುವಾದ ಕಡುಬುಗಳನ್ನೂ ಗೋಧಿ
ಹಿಟ್ಟಿನಿಂದ ಮಾಡಿಸಿ ಒಂದೇ ಬುಟ್ಟಿಯಲ್ಲಿ ತುಂಬಿಸ
ಬೇಕು. 3ಬಳಿಕ ಆ ಬುಟ್ಟಿಯನ್ನು ಆರೋನನಿಗೂ ಮತ್ತು
ಅವನ ಪುತ್ರರಿಗೂ ಕೊಡು. ಅದೇ ಸಮಯದಲ್ಲಿ ಹೋರಿ
ಯನ್ನು ಮತ್ತು ಎರಡು ಟಗರುಗಳನ್ನು ಅವರಿಗೆ ಕೊಡು.

4‘‘ತರುವಾಯ ಆರೋನನನ್ನೂ ಅವನ ಪುತ್ರರನ್ನೂ
ದೇವದರ್ಶನಗುಡಾರದ ದ್ವಾರಕ್ಕೆ ಕರೆದುಕೊಂಡು ಬಾ.
ಅವರನ್ನು ನೀರಿನಲ್ಲಿ ಸ್ನಾನಮಾಡಿಸು. 5ವಿಶೇಷವಾದ ಬಟ್ಟೆ
ಗಳನ್ನು ಆರೋನನಿಗೆ ತೊಡಿಸು. ಹೆಣೆದ ಅಂಗಿಯನ್ನು
ಮತ್ತು ಏಫೋದಿನೊಡನೆ ಧರಿಸತಕ್ಕ ದೈವ ನಿರ್ಣಯದ
ಪದಕವನ್ನು ಅವನಿಗೆ ತೊಡಿಸು. ಬಳಿಕ ಅಂದವಾದ ನಡು
ಕಟ್ಟನ್ನು ಅವನಿಗೆ ಕಟ್ಟು. 6ಅವನ ತಲೆಗೆ ಮುಂಡಾಸನ್ನು
ಇಡು ಮತ್ತು ಮುಂಡಾಸಕ್ಕೆ ವಿಶೇಷವಾದ ಕಿರೀಟವನ್ನು
ಕಟ್ಟಿಸು. 7ಅಭಿಷೇಕತೈಲವನ್ನು ತೆಗೆದುಕೊಂಡು
ಆರೋನನ ತಲೆಯ ಮೇಲೆ ಸುರಿ.

8‘‘ತರುವಾಯ ಆರೋನನ ಪುತ್ರರನ್ನು ಆ ಸ್ಥಳಕ್ಕೆ
ಕರೆದುಕೊಂಡು ಬಾ. ಅವರಿಗೆ ಹೆಣೆದ ಅಂಗಿಗಳನ್ನು
ತೊಡಿಸು. 9ಬಳಿಕ ಅವರ ಸೊಂಟಗಳಿಗೆ ನಡುಕಟ್ಟು
ಗಳನ್ನು ಸುತ್ತಿಸು. ಅಂದಿನಿಂದ ಅವರು ಯಾಜಕ
ರಾಗಿರುವರು. ವಿಶೇಷವಾದ ಈ ಕಟ್ಟಳೆಯು ಶಾಶ್ವತ
ವಾಗಿರುವುದರಿಂದ ಅವರು ಯಾಜಕರಾಗಿರುವರು.
ಹೀಗೆ ಆರೋನನನ್ನೂ ಅವನ ಪುತ್ರರನ್ನೂ ನೀನು
ಯಾಜಕರನ್ನಾಗಿ ಮಾಡುವೆ.

10‘‘ತರುವಾಯ ನೀನು ಹೋರಿಯನ್ನು ದೇವದರ್ಶನ
ಗುಡಾರದ ಎದುರಿಗೆ ತರಬೇಕು. ಆರೋನನು ಮತ್ತು
ಅವನ ಪುತ್ರರು ತಮ್ಮ ಕೈಗಳನ್ನು ಹೋರಿಯ ತಲೆಯ
ಮೇಲಿಡಬೇಕು. 11ಬಳಿಕ ದೇವದರ್ಶನಗುಡಾರದ ದ್ವಾರ
ದಲ್ಲಿ ಹೋರಿಯನ್ನು ವಧಿಸು. ಯೆಹೋವನು ಇದನ್ನು
ನೋಡುವನು. 12ತರುವಾಯ ಹೋರಿಯ ರಕ್ತದಲ್ಲಿ ಸ್ವಲ್ಪ
ವನ್ನು ತೆಗೆದುಕೊಂಡು ಯಜ್ಞವೇದಿಕೆಯ ಬಳಿಗೆ
ಹೋಗು. ವೇದಿಕೆಯ ಕೊಂಬುಗಳಿಗೆ ನಿನ್ನ ಬೆರಳಿನಿಂದ
ರಕ್ತವನ್ನು ಹಚ್ಚು. ಉಳಿದ ರಕ್ತವನ್ನೆಲ್ಲಾ ಯಜ್ಞವೇದಿಕೆಯ
ಬುಡಕ್ಕೆ ಸುರಿದುಬಿಡು. 13ಬಳಿಕ ಹೋರಿಯ ಒಳಗಿನ
ಕೊಬ್ಬನ್ನೂ ಪಿತ್ತಕೋಶದ ಸುತ್ತಲಿರುವ ಕೊಬ್ಬನ್ನೂ
ಎರಡು ಮೂತ್ರಪಿಂಡಗಳನ್ನು ಮತ್ತು ಅವುಗಳ
ಸುತ್ತಲಿರುವ ಕೊಬ್ಬನ್ನು ತೆಗೆದುಬಿಡು. ಈ ಕೊಬ್ಬನ್ನು

ಯಜ್ಞವೇದಿಕೆಯ ಮೇಲೆ ಹೋಮಮಾಡು. 14ಬಳಿಕ
ಹೋರಿಯ ಮಾಂಸ, ಚರ್ಮ, ಇತರ ಭಾಗಗಳನ್ನು ತೆಗೆದು
ಕೊಂಡು ಪಾಳೆಯದ ಹೊರಗೆ ತೆಗೆದುಕೊಂಡು ಹೋಗಿ
ಸುಟ್ಟುಬಿಡು. ಇದು ಯಾಜಕರ ಪಾಪಗಳನ್ನು ಪರಿ
ಹರಿಸುವ ಕಾಣಿಕೆಯಾಗಿದೆ.

15“ತರುವಾಯ ಆರೋನನಿಗೂ ಅವನ ಪುತ್ರರಿಗೂ
ತಮ್ಮ ಕೈಗಳನ್ನು ಒಂದು ಟಗರಿನ ತಲೆಯ ಮೇಲೆ ಇಡ
ಬೇಕೆಂದು ಹೇಳು. 16ಆ ಟಗರನ್ನು ವಧಿಸಿ ಅದರ ರಕ್ತವನ್ನು
ಯಜ್ಞವೇದಿಕೆಯ ನಾಲ್ಕು ಕಡೆಗಳಿಗೆ ಚೆಲ್ಲು. 17ಬಳಿಕ ಟಗ
ರನ್ನು ಅನೇಕ ತುಂಡುಗಳಾಗಿ ಕತ್ತರಿಸು. ಟಗರಿನ ಒಳಗಿನ
ಎಲ್ಲಾ ಭಾಗಗಳನ್ನು ಮತ್ತು ಕಾಲುಗಳನ್ನು ತೊಳೆಯ
ಬೇಕು. ಅವುಗಳನ್ನು ತಲೆಯ ಮತ್ತು ಟಗರಿನ ಇತರ
ತುಂಡುಗಳೊಡನೆ ಇಡು. 18ತರುವಾಯ ಯಜ್ಞ
ವೇದಿಕೆಯ ಮೇಲೆ ಇಡೀ ಟಗರನ್ನು ಹೋಮಮಾಡು.
ಇದು ವಿಶೇಷವಾದ ಸರ್ವಾಂಗ ಹೋಮವಾಗಿದೆ. ಇದು
ಯೆಹೋವನಿಗೆ ಪರಿಮಳ ವಾಸನೆಯಾಗಿದ್ದು ಆತನಿಗೆ
ಮೆಚ್ಚಿಕೆಕರವಾಗಿದೆ.

19“ಮತ್ತೊಂದು ಟಗರಿನ ಮೇಲೆ ತಮ್ಮ ಕೈಗಳನ್ನಿಡಲು
ಆರೋನನಿಗೂ ಅವನ ಪುತ್ರರಿಗೂ ಹೇಳು. 20ಆ ಟಗ
ರನ್ನು ವಧಿಸಿ ಅದರ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊ. ಆ
ರಕ್ತವನ್ನು ಆರೋನ ಮತ್ತು ಅವನ ಪುತ್ರರ ಬಲಗಿವಿಯ
ತುದಿಗೆ ಹಚ್ಚು. ಅದಲ್ಲದೆ ಅವರ ಬಲಗೈಗಳ ಹೆಬ್ಬೆರುಳು
ಗಳಿಗೂ ಸ್ವಲ್ಪ ರಕ್ತವನ್ನು ಹಚ್ಚು. ಸ್ವಲ್ಪ ರಕ್ತವನ್ನು ಅವರ
ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚು. ಬಳಿಕ ಉಳಿದ ರಕ್ತವನ್ನು
ಯಜ್ಞವೇದಿಕೆಯ ನಾಲ್ಕು ಕಡೆಗಳಿಗೆ ಚೆಲ್ಲು. 21ತರು
ವಾಯ ಯಜ್ಞವೇದಿಕೆಯಿಂದ ಸ್ವಲ್ಪ ರಕ್ತವನ್ನು ತೆಗೆ
ದುಕೊ. ಅದನ್ನು ವಿಶೇಷವಾದ ಅಭಿಷೇಕತೈಲದಲ್ಲಿ
ಬೆರಸಿ ಆರೋನನ ಮೇಲೆಯೂ ಅವನ ಬಟ್ಟೆಗಳ
ಮೇಲೆಯೂ ಚಿಮಿಕಿಸು. ಅವನ ಪುತ್ರರ ಮತ್ತು ಅವರ
ಬಟ್ಟೆಗಳ ಮೇಲೆಯೂ ಚಿಮಿಕಿಸು. ಆಗ ಅವರು ಪರಿಶುದ್ಧ
ಗೊಳ್ಳುವರು, ಅವರ ಬಟ್ಟೆಗಳೂ ಪರಿಶುದ್ಧಗೊಳ್ಳುವವು.
ಆರೋನನು ಮತ್ತು ಅವನ ಪುತ್ರರು ವಿಶೇಷವಾದ ರೀತಿ
ಯಲ್ಲಿ ನನ್ನ ಸೇವೆ ಮಾಡುತ್ತಾರೆಂದು ಇದು
ತೋರಿಸುವುದು.

22“ಬಳಿಕ ಟಗರಿನ ಕೊಬ್ಬನ್ನು ತೆಗೆದುಕೊ. (ಇದು
ಆರೋನನನ್ನು ಪ್ರಧಾನಯಾಜಕನನ್ನಾಗಿ ಮಾಡುವ
ಆಚಾರವಿಧಿಯಲ್ಲಿ ಉಪಯೋಗಿಸಲ್ಪಡುವ ಟಗರು.)
ಬಾಲದ ಸುತ್ತಲಿರುವ ಕೊಬ್ಬನ್ನು, ದೇಹದ ಒಳಗಿನ ಅಂಗ
ಗಳನ್ನು ಮುಚ್ಚಿಕೊಂಡಿರುವ ಕೊಬ್ಬನ್ನು, ಪಿತ್ತಕೋಶದ
ಸುತ್ತಲಿರುವ ಕೊಬ್ಬನ್ನು, ಎರಡು ಮೂತ್ರಪಿಂಡಗಳನ್ನು
ಮತ್ತು ಬಲತೊಡೆಯನ್ನು ತೆಗೆದುಕೊ. 23ಬಳಿಕ ನೀನು
ಮಾಡಿದ ಹುಳಿಯಿಲ್ಲದ ರೊಟ್ಟಿಯ ಬುಟ್ಟಿಯನ್ನು
ತೆಗೆದುಕೊ. ಇದು ಯೆಹೋವನ ಮುಂದೆ ಇಟ್ಟ ಬುಟ್ಟಿ
ಯಾಗಿದೆ. ಒಂದು ತುಂಡು ರೊಟ್ಟಿ, ಎಣ್ಣೆಯಿಂದ
ಮಾಡಿದ ಒಂದು ಹೋಳಿಗೆ, ತೆಳುವಾದ ಒಂದು ಕಡುಬು
ಇವುಗಳನ್ನು ಬುಟ್ಟಿಯಿಂದ ತೆಗೆದುಕೊ. 24ಇವುಗಳನ್ನು
ಆರೋನನಿಗೂ ಅವನ ಪುತ್ರರಿಗೂ ಕೊಡು.
ಯೆಹೋವನ ಮುಂದೆ ಇವುಗಳನ್ನು ತಮ್ಮ ಕೈಯಲ್ಲಿ
ಹಿಡಿದುಕೊಂಡು ನಿವಾಳಿಸಬೇಕೆಂದು ಅವರಿಗೆ ಹೇಳು.
ಇದು ಯೆಹೋವನಿಗೆ ವಿಶೇಷವಾದ ನೈವೇದ್ಯಾರ್ಪಣೆ
ಯಾಗಿದೆ. 25ಬಳಿಕ ಈ ವಸ್ತುಗಳನ್ನು ಆರೋನನ ಮತ್ತು
ಅವನ ಪುತ್ರರ ಕೈಯಿಂದ ತೆಗೆದುಕೊಂಡು ಟಗರಿನ ಜೊತೆ
ಯಜ್ಞವೇದಿಕೆಯ ಮೇಲಿಡು. ಈ ಸರ್ವಾಂಗಹೋಮವು
ಯೆಹೋವನಿಗೆ ಸುಗಂಧಹೋಮವಾಗಿದ್ದು ಆತನನ್ನು
ಮೆಚ್ಚಿಸುವುದು.

26“ತರುವಾಯ ಟಗರಿನ ಎದೆಯ ಭಾಗವನ್ನು ತೆಗೆ
ದುಕೊ. (ಆರೋನನನ್ನು ಪ್ರಧಾನಯಾಜಕನನ್ನಾಗಿ
ಮಾಡುವ ಆಚಾರವಿಧಿಯಲ್ಲಿ ಉಪಯೋಗಿಸಲ್ಪಡುವ
ಟಗರು ಇದಾಗಿದೆ.) ಟಗರಿನ ಎದೆಯ ಭಾಗವನ್ನು
ವಿಶೇಷ ಸಮರ್ಪಣೆಯಾಗಿ ಯೆಹೋವನ ಮುಂದೆ
ನಿವಾಳಿಸಬೇಕು. ಪಶುವಿನ ಈ ಭಾಗವು ನಿನಗೆ ಸಲ್ಲತಕ್ಕ
ಪಾಲು. 27ಬಳಿಕ ಆರೋನನನ್ನು ಮಹಾಯಾಜಕನನ್ನಾಗಿ
ಮಾಡಲು ನಿವಾಳಿಸಲ್ಪಟ್ಟ ಟಗರಿನ ಎದೆಯ ಭಾಗವನ್ನೂ
ಯಾಜಕರ ಭಾಗವಾದ ನಿವಾಳಿಸಲ್ಪಟ್ಟ ಟಗರಿನ ತೊಡೆ
ಯನ್ನೂ ತೆಗೆದುಕೋ. ಅವುಗಳನ್ನು ಆರೋನನಿಗೂ
ಅವನ ಗಂಡುಮಕ್ಕಳಿಗೂ ಕೊಡು. ಇದು ಕಾಣಿಕೆಯ
ವಿಶೇಷ ಭಾಗವಾಗಿದೆ. 28ಇಸ್ರೇಲರು ಆರೋನನಿಗೂ
ಅವನ ಪುತ್ರರಿಗೂ ಈ ಭಾಗಗಳನ್ನು ಯಾವಾಗಲೂ
ಕೊಡುವರು. ಇಸ್ರೇಲರು ಯೆಹೋವನಿಗೆ ಅರ್ಪಿಸುವ
ಕಾಣಿಕೆಗಳಲ್ಲಿ ಈ ಭಾಗಗಳು ಯಾವಾಗಲೂ ಯಾಜಕರಿಗೆ
ಸೇರಿದ್ದಾಗಿವೆ. ಅವರು ಯಾಜಕರಿಗೆ ಕೊಡುವ ಈ ಭಾಗ
ಗಳು ಯೆಹೋವನಿಗೆ ಸಮರ್ಪಿಸಲ್ಪಟ್ಟಂತಿರುತ್ತವೆ.

29“ಆರೋನನಿಗೋಸ್ಕರ ಮಾಡಿಸಿದ ವಿಶೇಷವಾದ
ವಸ್ತ್ರಗಳನ್ನು ಅವನ ತರುವಾಯ ಅವನ ವಂಶಸ್ಥರೂ
ಯಾಜಕೋದ್ಯೋಗಕ್ಕೆ ಆರಿಸಲ್ಪಟ್ಟಾಗ, ಅವುಗಳನ್ನು
ಧರಿಸಿಕೊಳ್ಳುವರು. 30ಆರೋನನ ತರುವಾಯ ಅವನ
ಮಗನು ಪ್ರಧಾನಯಾಜಕನಾಗುವನು. ಅವನು ಪವಿತ್ರ
ಸ್ಥಳದಲ್ಲಿ ಸೇವೆ ಮಾಡಲು ದೇವದರ್ಶನಗುಡಾರಕ್ಕೆ
ಪ್ರವೇಶಿಸಿದಂದಿನಿಂದ ಏಳು ದಿನಗಳವರೆಗೆ ಆ ವಸ್ತ್ರಗಳನ್ನು
ಧರಿಸಿಕೊಂಡಿರುವನು.

31“ಆರೋನನನ್ನು ಪ್ರಧಾನ ಯಾಜಕನನ್ನಾಗಿ
ಮಾಡಲು ಉಪಯೋಗಿಸಿದ ಟಗರಿನ ಮಾಂಸವನ್ನು ದೇವ
ದರ್ಶನಗುಡಾರದ ಪ್ರಾಕಾರದಲ್ಲಿ ಬೇಯಿಸು. 32ಬಳಿಕ
ಆರೋನನು ಮತ್ತು ಅವನ ಪುತ್ರರು ದೇವದರ್ಶನ

ಗುಡಾರದ ಮುಂಭಾಗದಲ್ಲಿ ಆ ಮಾಂಸವನ್ನೂ ಬುಟ್ಟಿ
ಯಲ್ಲಿರುವ ರೊಟ್ಟಿಯನ್ನೂ ತಿನ್ನಬೇಕು. 33ಅವರು
ಯಾಜಕರಾಗಿ ಮಾಡಲ್ಪಟ್ಟಾಗ ಅವರ ಪಾಪ ನಿವಾರಣೆ
ಗಾಗಿ ಇವುಗಳನ್ನು ಸಮರ್ಪಿಸಲಾಗಿತ್ತು. ಆದ್ದರಿಂದ ಆ
ಸಮರ್ಪಣೆಗಳನ್ನು ಅವರು ಮಾತ್ರ ತಿನ್ನಬೇಕೇ ಹೊರತು
ಬೇರೆಯವರು ತಿನ್ನಬಾರದು; ಯಾಕಂದರೆ ಅವು
ಪರಿಶುದ್ಧವಾಗಿವೆ ಮತ್ತು ಪ್ರತ್ಯೇಕಿಸಲ್ಪಟ್ಟವುಗಳಾಗಿವೆ.
34ಟಗರಿನ ಮಾಂಸ ಅಥವಾ ರೊಟ್ಟಿಯೇನಾದರೂ ಮರು
ದಿನ ಮುಂಜಾನೆಯವರೆಗೆ ಉಳಿದರೆ, ಅದನ್ನು ಸುಟ್ಟು
ಬಿಡಬೇಕು. ನೀವು ರೊಟ್ಟಿಯನ್ನಾಗಲೀ ಮಾಂಸವನ್ನಾ
ಗಲೀ ತಿನ್ನಬಾರದು. ಯಾಕಂದರೆ ಅದನ್ನು ವಿಶೇಷವಾದ
ಸಂದರ್ಭದಲ್ಲಿ ವಿಶೇಷವಾದ ರೀತಿಯಲ್ಲಿ ಮಾತ್ರ ತಿನ್ನ
ಬೇಕು.

35“ನಾನು ನಿನಗೆ ಆಜ್ಞಾಪಿಸಿದ ಇವುಗಳನ್ನೆಲ್ಲ ಆರೋನ
ಮತ್ತು ಅವನ ಪುತ್ರರಿಗೋಸ್ಕರ ಮಾಡು. ಅವರನ್ನು
ಯಾಜಕರನ್ನಾಗಿ ನೇಮಿಸುವ ಸಮಾರಂಭವು ಏಳು ದಿನ
ಗಳವರೆಗೆ ನಡೆಯಬೇಕು. 36ಏಳು ದಿನಗಳವರೆಗೆ ಪ್ರತಿ
ದಿನ ಒಂದು ಹೋರಿಯನ್ನು ವಧಿಸು. ಇದು ಆರೋನನ
ಮತ್ತು ಅವನ ಪುತ್ರರ ಪಾಪನಿವಾರಣೆಯ ಸಮರ್ಪಣೆ
ಯಾಗಿರುವುದು. ಅದಲ್ಲದೆ ಯಜ್ಞವೇದಿಕೆಯನ್ನು ಪರಿ
ಶುದ್ಧಗೊಳಿಸಲು ಅದರ ಮೇಲೆ ದೋಷಪರಿಹಾರಕ
ಯಜ್ಞವನ್ನು ಸಮರ್ಪಿಸಿ. ಅದನ್ನು ದೇವರ ಸೇವೆಗೋಸ್ಕರ
ಅಭಿಷೇಕಿಸಬೇಕು. 37ಹೀಗೆ ಏಳು ದಿನಗಳವರೆಗೆ ಯಜ್ಞ
ವೇದಿಕೆಯನ್ನು ಶುದ್ಧಗೊಳಿಸಿ ಪವಿತ್ರಗೊಳಿಸಬೇಕು. ಆ
ಸಮಯದಲ್ಲಿ ಯಜ್ಞವೇದಿಕೆಯು ಮಹಾ ಪವಿತ್ರವಾಗಿರು
ವುದು. ಯಜ್ಞವೇದಿಕೆಗೆ ಸೋಂಕಿದ ವಸ್ತುಗಳೆಲ್ಲವೂ
ಪವಿತ್ರವಾಗುವುದು.

38“ಯಜ್ಞವೇದಿಕೆಯ ಮೇಲೆ ಪ್ರತಿದಿನ ಯಜ್ಞವನ್ನು
ಸಮರ್ಪಿಸಬೇಕು. ಒಂದು ವರ್ಷದ ಎರಡು ಕುರಿಮರಿ
ಗಳನ್ನು ನೀನು ವಧಿಸಬೇಕು. 39ಮುಂಜಾನೆ ಒಂದು ಕುರಿ
ಮರಿಯನ್ನು ಸಮರ್ಪಿಸು. 40ನೀನು ಮೊದಲಿನ ಕುರಿಮರಿ
ಯನ್ನು ವಧಿಸುವಾಗ ಮೂರು ಸೇರು ಶ್ರೇಷ್ಠಗೋಧಿ
ಹಿಟ್ಟನ್ನೂ ಸಮರ್ಪಿಸು. ಆ ಹಿಟ್ಟನ್ನು ಒಂದೂವರೆ ಸೇರು
ದ್ರಾಕ್ಷಾರಸದೊಂದಿಗೆ ಬೆರೆಸು. 41ನೀನು ಸಾಯಂಕಾಲ
ದಲ್ಲಿ ಮತ್ತೊಂದು ಕುರಿಮರಿಯನ್ನು ವಧಿಸುವಾಗಲೂ
ಮೂರು ಸೇರು ಶ್ರೇಷ್ಠ ಗೋಧಿಯನ್ನೂ ಅರ್ಧ ಸೇರು
ದ್ರಾಕ್ಷಾರಸವನ್ನು ಸಮರ್ಪಿಸು. ಇದು ಯೆಹೋವನಿಗೆ
ಸುಗಂಧಹೋಮವಾಗಿರುವುದು.

42“ನೀನು ಪ್ರತಿದಿನ ಈ ಸರ್ವಾಂಗಹೋಮವನ್ನು
ಸಮರ್ಪಣೆಯಾಗಿ ಅರ್ಪಿಸಬೇಕು. ದೇವದರ್ಶನ
ಗುಡಾರದ ದ್ವಾರದಲ್ಲಿ ಯೆಹೋವನ ಮುಂದೆ ಇದನ್ನು
ಮಾಡು. ನೀನು ಸಮರ್ಪಣೆಯನ್ನು ಮಾಡುವಾಗ
ಯೆಹೋವನಾದ ನಾನು ಅಲ್ಲಿ ನಿನ್ನನ್ನು ಸಂಧಿಸಿ ನಿನ್ನೊ
ಡನೆ ಮಾತಾಡುವೆನು. 43ಆ ಸ್ಥಳದಲ್ಲಿ ನಾನು ಇಸ್ರೇಲರನ್ನು
ಸಂಧಿಸುವೆನು. ನನ್ನ ಪ್ರಭಾವದಿಂದ ಆ ಸ್ಥಳವು ಪವಿತ್ರ
ವಾಗುವುದು.

44“ಅಲ್ಲದೆ ನಾನು ದೇವದರ್ಶನಗುಡಾರವನ್ನೂ
ಯಜ್ಞವೇದಿಕೆಯನ್ನೂ ಪವಿತ್ರಗೊಳಿಸುವೆನು. ಆರೋನ
ನನ್ನೂ ಅವನ ಪುತ್ರರನ್ನೂ ಪವಿತ್ರಗೊಳಿಸುವೆನು; ಆಗ
ಅವರು ಯಾಜಕರಾಗಿ ನನಗೆ ಸೇವೆ ಮಾಡ ಶಕ್ತರಾಗು
ವರು. 45ನಾನು ಇಸ್ರೇಲರ ಮಧ್ಯದಲ್ಲಿ ವಾಸಿಸುವೆನು
ಮತ್ತು ಅವರ ದೇವರಾಗಿರುವೆನು. 46ನಾನು ಅವರ ದೇವ
ರಾದ ಯೆಹೋವನಾಗಿದ್ದೇನೆಂದು ಜನರು ತಿಳಿದುಕೊಳ್ಳು
ವರು. ಅವರ ಮಧ್ಯದಲ್ಲಿ ವಾಸಮಾಡುವುದಕ್ಕಾಗಿ ಈಜಿಪ್ಟಿ
ನಿಂದ ಅವರನ್ನು ಕರೆದುಕೊಂಡು ಬಂದವನು ನಾನೇ
ಎಂದು ಅವರು ತಿಳಿದುಕೊಳ್ಳುವರು. ನಾನು ಅವರ ದೇವ
ರಾಗಿರುವ ಯೆಹೋವನೇ.”

## ಧೂಪವೇದಿಕೆ

30 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
“ಜಾಲೀಮರದಿಂದ ಧೂಪವೇದಿಕೆಯನ್ನು
ಮಾಡಿಸು. 2ಈ ಧೂಪವೇದಿಕೆಯು ಚಚ್ಚೌಕವಾಗಿ ಒಂದು
ಮೊಳ ಉದ್ದ, ಒಂದು ಮೊಳ ಅಗಲ, ಎರಡು ಮೊಳ ಎತ್ತರ
ಇರಬೇಕು. ಅದರ ನಾಲ್ಕು ಮೂಲೆಗಳಲ್ಲೂ ಕೊಂಬುಗ
ಳಿರಬೇಕು. ಈ ಕೊಂಬುಗಳು ಧೂಪವೇದಿಕೆಯ ಅವಿ
ಭಾಜ್ಯ ಭಾಗವಾಗಿರಬೇಕು. 3ಧೂಪವೇದಿಕೆಯ ಮೇಲ್ಭಾ
ಗವನ್ನೂ ಎಲ್ಲಾ ಪಾರ್ಶ್ವಗಳನ್ನೂ ಅದರ ಕೊಂಬುಗಳನ್ನೂ
ಶುದ್ಧ ಬಂಗಾರದ ತಗಡಿನಿಂದ ಹೊದಿಸಬೇಕು ಮತ್ತು
ಸುತ್ತಲೂ ಚಿನ್ನದ ಕಟ್ಟನ್ನು ಕಟ್ಟಿಸಬೇಕು. 4ಧೂಪವೇದಿ
ಕೆಯ ಎದುರುಬದುರಾಗಿರುವ ಎರಡು ಗೋಡೆಗಳಲ್ಲಿ
ಕಟ್ಟಿನ ಕೆಳಗೆ ಎರಡು ಚಿನ್ನದ ಬಳೆಗಳನ್ನು ಮಾಡಿಸು.
ಧೂಪವೇದಿಕೆಯನ್ನು ಹೊರುವ ಕಂಬಗಳನ್ನು ಈ ಬಳೆ
ಗಳು ಹಿಡಿದುಕೊಂಡಿರುತ್ತವೆ. 5ಕಂಬಗಳನ್ನು ಜಾಲೀಮರ
ದಿಂದ ಮಾಡಿಸು. ಚಿನ್ನದ ತಗಡಿನಿಂದ ಕೋಲುಗಳನ್ನು
ಹೊದಿಸು. 6ವಿಶೇಷ ಪರದೆಯ (ಒಡಂಬಡಿಕೆಯ ಪೆಟ್ಟಿಗೆ
ಯನ್ನು ಆವರಿಸಿಕೊಂಡಿರುವ) ಮುಂಭಾಗದಲ್ಲಿ ಧೂಪ
ವೇದಿಕೆಯನ್ನು ಇಡು. ಧೂಪವೇದಿಕೆಯು ಒಡಂಬಡಿಕೆ
ಪೆಟ್ಟಿಗೆಯ ಕೃಪಾಸನದ ಮುಂಭಾಗದಲ್ಲಿರುವುದು. ಇದು
ನಾನು ನಿನ್ನನ್ನು ಸಂಧಿಸುವ ಸ್ಥಳವಾಗಿದೆ.

7“ಆರೋನನು ಪ್ರತಿಮುಂಜಾನೆ ಧೂಪವೇದಿಕೆಯ
ಮೇಲೆ ಸುಗಂಧದ್ರವ್ಯಗಳ ಧೂಪವನ್ನು ಉರಿಸಬೇಕು.
ಅವನು ದೀಪಗಳನ್ನು ಸರಿಪಡಿಸಲು ಬರುವಾಗ ಇದನ್ನು
ಮಾಡುವನು. 8ತಿರುಗಿ ಸಾಯಂಕಾಲದಲ್ಲಿ ಧೂಪವನ್ನು
ಉರಿಸಬೇಕು. ಇದು ಸಾಯಂಕಾಲಗಳಲ್ಲಿ ಅವನು

ದೀಪಗಳನ್ನು ಹೊತ್ತಿಸುವ ಸಮಯವಾಗಿರುತ್ತದೆ. ಹೀಗೆ
ಪ್ರತಿದಿನ ಯೆಹೋವನ ಮುಂದೆ ನಿತ್ಯವಾದ ಧೂಪ
ಸಮರ್ಪಣೆ ಇರುವುದು. [9]ಈ ಧೂಪವೇದಿಕೆಯನ್ನು ಬೇರೆ
ವಿಧದ ಧೂಪಸಮರ್ಪಣೆಗಾಗಲೀ ಸರ್ವಾಂಗ ಹೋಮ
ವನ್ನು ಅರ್ಪಿಸುವುದಕ್ಕಾಗಲೀ ಯಾವುದೇ ಧಾನ್ಯ
ಸಮರ್ಪಣೆಗಾಗಲೀ ಪಾನದ್ರವ್ಯ ಸಮರ್ಪಣೆಗಾಗಲೀ
ಉಪಯೋಗಿಸಬಾರದು.
[10]''ಆರೋನನು ವರ್ಷಕ್ಕೊಮ್ಮೆ ಯೆಹೋವನಿಗೆ
ವಿಶೇಷ ಯಜ್ಞವನ್ನು ಸಮರ್ಪಿಸಬೇಕು. ಜನರ ಪಾಪಗಳ
ಪ್ರಾಯಶ್ಚಿತ್ತಕ್ಕಾಗಿ ಆರೋನನು ದೋಷಪರಿಹಾರಕ
ಯಜ್ಞದ ರಕ್ತವನ್ನು ಉಪಯೋಗಿಸುವನು. ಆರೋನನು
ಇದನ್ನು ಈ ಯಜ್ಞವೇದಿಕೆಯ ಕೊಂಬುಗಳಲ್ಲಿ ಮಾಡು
ವನು. ಆ ದಿನವು ದೋಷಪರಿಹಾರಕ ದಿನವೆಂದು ಕರೆ
ಯಲ್ಪಡುವುದು. ಯೆಹೋವನಿಗೆ ಇದು ಅತೀ ಪರಿಶುದ್ಧ
ವಾದ ವಿಶೇಷ ದಿನವಾಗಿದೆ.''

## ದೇವಾಲಯದ ತೆರಿಗೆ

[11]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[12]''ಇಸ್ರೇಲರನ್ನು ಲೆಕ್ಕಿಸು. ಹೀಗಾಗಿ ಎಷ್ಟುಮಂದಿ ಜನರಿ
ರುತ್ತಾರೆಂದು ನೀನು ತಿಳಿದುಕೊಳ್ಳುವೆ. ಪ್ರತಿಸಾರಿ ಇದನ್ನು
ಮಾಡಿದಾಗ, ಪ್ರತಿಯೊಬ್ಬನು ತನಗೋಸ್ಕರವಾಗಿ
ಯೆಹೋವನಿಗೆ ತೆರಿಗೆಯನ್ನು ಕೊಡಬೇಕು. ಆಗ ಜನರಿಗೆ
ಯಾವ ಕೇಡುಗಳೂ ಉಂಟಾಗುವುದಿಲ್ಲ. [13]ಲೆಕ್ಕಿಸಲ್ಪಟ್ಟ
ಪ್ರತಿಯೊಬ್ಬನು ಅಧಿಕೃತ ಅಳತೆಗನುಸಾರವಾಗಿರುವ
ಅರ್ಧ ಶೆಕಲ್ ಕಪ್ಪವನ್ನು ಕೊಡಬೇಕು. ಈ ಅರ್ಧಶೆಕಲ್
ಯೆಹೋವನಿಗೆ ಕಾಣಿಕೆಯಾಗಿರುತ್ತದೆ. [14]ಲೆಕ್ಕಿಸಲ್ಪ
ಟ್ಟವರಲ್ಲಿ ಇಪ್ಪತ್ತು ವರ್ಷದವರೂ ಅದಕ್ಕೆ ಮೇಲ್ಪಟ್ಟವರೂ
ಈ ಕಾಣಿಕೆಯನ್ನು ಯೆಹೋವನಿಗೆ ಕೊಡಬೇಕು.
[15]ಐಶ್ವರ್ಯವಂತರು ಅರ್ಧಶೆಕಲಿಗಿಂತ ಹೆಚ್ಚು ಕೊಡ
ಬಾರದು; ಬಡವರು ಅರ್ಧಶೆಕಲಿಗಿಂತ ಕಡಿಮೆ ಕೊಡ
ಬಾರದು ಜನರೆಲ್ಲರೂ ಈ ಕಾಣಿಕೆಯನ್ನು ಯೆಹೋವ
ನಿಗೆ ಅರ್ಪಿಸಬೇಕು. ಇದು ನಿಮ್ಮ ಪ್ರಾಣ ರಕ್ಷಣೆಯ ತೆರಿಗೆ
ಯಾಗಿದೆ. [16]ಇಸ್ರೇಲರಿಂದ ಈ ಹಣವನ್ನು ಒಟ್ಟುಗೂಡಿಸ
ಬೇಕು. ದೇವದರ್ಶನ ಗುಡಾರದ ಸೇವೆಗಾಗಿ ಹಣವನ್ನು
ಉಪಯೋಗಿಸಬೇಕು. ಯೆಹೋವನು ತನ್ನ ಜನರನ್ನು
ಜ್ಞಾಪಿಸಿಕೊಳ್ಳುವುದಕ್ಕಾಗಿ ಈ ಕಪ್ಪವು ಒಂದು ಮಾರ್ಗ
ವಾಗಿದೆ. ಅವರು ತಮ್ಮ ಪ್ರಾಣರಕ್ಷಣೆಗಾಗಿ ಹಣವನ್ನು
ಕೊಡುತ್ತಿರುವರು.''

## ಗಂಗಾಳ

[17]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[18]''ತಾಮ್ರದ ಗಂಗಾಳವನ್ನು ಮಾಡಿ ಅದನ್ನು ತಾಮ್ರದ
ಪೀಠದ ಮೇಲಿಡು. ತೊಳೆದುಕೊಳ್ಳುವುದಕ್ಕೆ ನೀವು
ಇದನ್ನು ಉಪಯೋಗಿಸುವಿರಿ. ಗಂಗಾಳವನ್ನು ದೇವದರ್ಶ
ನಗುಡಾರ ಮತ್ತು ಯಜ್ಞವೇದಿಕೆಯ ನಡುವೆ ಇಡು.
ಗಂಗಾಳದಲ್ಲಿ ನೀರನ್ನು ತುಂಬಿಸು. [19]ಆರೋನನು ಮತ್ತು
ಅವನ ಪುತ್ರರು ಈ ಗಂಗಾಳದಲ್ಲಿರುವ ನೀರಿನಿಂದ ತಮ್ಮ
ಕೈಕಾಲುಗಳನ್ನು ತೊಳೆದುಕೊಳ್ಳಬೇಕು. [20]ಪ್ರತಿಸಾರಿ
ದೇವದರ್ಶನಗುಡಾರಕ್ಕೆ ಪ್ರವೇಶಿಸುವಾಗ ಅಥವಾ
ಯೆಹೋವನಿಗಾಗಿ ಸರ್ವಾಂಗಹೋಮಗಳನ್ನು ಅರ್ಪಿ
ಸಲು ಯಜ್ಞವೇದಿಕೆಯ ಹತ್ತಿರಕ್ಕೆ ಬರುವಾಗ ಅವರು
ನೀರಿನಿಂದ ತೊಳೆದುಕೊಳ್ಳಬೇಕು. ಆಗ ಅವರು ಸಾಯು
ವುದಿಲ್ಲ. [21]ಅವರು ತಮ್ಮ ಕೈಕಾಲುಗಳನ್ನು ತೊಳೆದು
ಕೊಳ್ಳುವುದರಿಂದ ಅವರು ಸಾಯುವುದಿಲ್ಲ. ಆರೋನ
ನಿಗೂ ಅವನ ಸಂತತಿಯವರಿಗೂ ಇದು ಶಾಶ್ವತವಾದ
ನಿಯಮ. ತಲೆಮಾರುಗಳವರೆಗೆ ಆರೋನನ ಸಂತತಿಯ
ವರಿಗೆಲ್ಲಾ ಇದೇ ಕಟ್ಟಳೆಯಿರುವುದು.''

## ಅಭಿಷೇಕತೈಲ

[22]ತರುವಾಯ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ: [23]''ಶ್ರೇಷ್ಠವಾದ ಸುಗಂಧದ್ರವ್ಯಗಳನ್ನು
ಮಾಡಿಸು. ಹನ್ನೆರಡು ಪೌಂಡುಗಳಷ್ಟು ಅಚ್ಚರಕ್ತಬೋಳ,
ಅದರ ಅರ್ಧದಷ್ಟು (ಅಂದರೆ ಆರು ಪೌಂಡು) ಸುವಾಸ
ನೆಯುಳ್ಳ ದಾಲ್ಚಿನ್ನಿ, ಹನ್ನೆರಡು ಪೌಂಡುಗಳಷ್ಟು ಸುವಾಸನೆ
ಯುಳ್ಳ ಬಜೆ, [24]ಮತ್ತು ಆರು ಪೌಂಡುಗಳಷ್ಟು ಲವಂಗ
ಚಕ್ಕೆಯನ್ನು ತೆಗೆದುಕೊಂಡು ಬಾ. ಇವುಗಳನ್ನೆಲ್ಲ ಅಧಿಕೃತ
ಅಳತೆಮಾಪಕದಿಂದ ಅಳತೆಮಾಡು. ಒಂದು ಗ್ಯಾಲನ್
ಆಲಿವ್ ಎಣ್ಣೆಯನ್ನೂ ತೆಗೆದುಕೊಂಡು ಬಾ.
[25]''ಸುವಾಸನೆಯುಳ್ಳ ಪವಿತ್ರ ಅಭಿಷೇಕತೈಲವನ್ನು
ಮಾಡಲು ಇವುಗಳನ್ನೆಲ್ಲ ಒಟ್ಟಿಗೆ ಬೆರೆಸು. [26]ದೇವದರ್ಶನ
ಗುಡಾರವನ್ನು ಮತ್ತು ಒಡಂಬಡಿಕೆಯ ಪೆಟ್ಟಿಗೆಯನ್ನು
ಅಭಿಷೇಕಿಸಲು ಈ ತೈಲವನ್ನು ಉಪಯೋಗಿಸು. [27]ಈ ತೈಲ
ವನ್ನು ಮೇಜಿನ ಮೇಲಿರುವ ಎಲ್ಲಾ ಉಪಕರಣಗಳ ಮೇಲೆ
ಸುರಿ. ಈ ತೈಲವನ್ನು ದೀಪ ಮತ್ತು ಅದರ ಉಪಕರಣ
ಗಳೆಲ್ಲದರ ಮೇಲೆ ಸುರಿ. ಆ ಯಜ್ಞವೇದಿಕೆಯ ಮೇಲಿ
ರುವ ಅದರ ಉಪಕರಣಗಳ ಮೇಲೆಯೂ ಈ ತೈಲವನ್ನು
ಸುರಿ. ತೈಲವನ್ನು ಧೂಪವೇದಿಕೆಯ ಮೇಲೆ ಸುರಿ. [28]ದೇವ
ರಿಗೆ ಬೆಂಕಿಯ ಮೂಲಕ ಅರ್ಪಿಸುವ ಹೋಮಗಳ
ಮೇಲೆಯೂ ತೈಲವನ್ನು ಸುರಿ. ಈ ತೈಲವನ್ನು ಗಂಗಾಳದ
ಮೇಲೆಯೂ ಮತ್ತು ಗಂಗಾಳದ ಕೆಳಗಿರುವ ಪೀಠದ
ಮೇಲೆಯೂ ಸುರಿ. [29]ಆಗ ನೀನು ಈ ಉಪಕರಣಗಳ
ನ್ನೆಲ್ಲ ಪವಿತ್ರಗೊಳಿಸುವೆ. ಅವುಗಳು ಯೆಹೋವನಿಗೆ ಬಹು
ವಿಶೇಷವಾಗಿವೆ. ಅವುಗಳಿಗೆ ಸೋಂಕಿದ್ದೆಲ್ಲವೂ ಪವಿತ್ರ
ವಾಗುತ್ತವೆ.

30‘‘ಆರೋನನನ್ನು ಮತ್ತು ಅವನ ಪುತ್ರರನ್ನು ಈ ತೈಲ
ದಿಂದ ಅಭಿಷೇಕಿಸು. ಅವರು ವಿಶೇಷವಾದ ರೀತಿಯಲ್ಲಿ
ನನ್ನ ಸೇವೆ ಮಾಡುತ್ತಾರೆಂದು ಇದು ತೋರಿಸುವುದು. ಆಗ
ಅವರು ಅಭಿಷೇಕಿಸಲ್ಪಟ್ಟ ಯಾಜಕರಾಗಿ ನನ್ನ ಸೇವೆ ಮಾಡ
ಬಹುದು. 31ಅಭಿಷೇಕತೈಲವು ಪವಿತ್ರವಾದದ್ದು. ಅದನ್ನು
ಯಾವಾಗಲೂ ನನಗಾಗಿ ಮಾತ್ರವೇ ಉಪಯೋಗಿಸ
ಬೇಕೆಂದು ಇಸ್ರೇಲರಿಗೆ ಹೇಳು. 32ಯಾರೂ ಇದನ್ನು
ಸಾಮಾನ್ಯವಾದ ಸುಗಂಧವಾಸನೆಯುಳ್ಳ ತೈಲವಾಗಿ ಉಪ
ಯೋಗಿಸಬಾರದು. ಈ ವಿಶೇಷವಾದ ತೈಲವನ್ನು
ಮಾಡುವ ರೀತಿಯಲ್ಲಿ ಸಾಮಾನ್ಯವಾದ ಸುಗಂಧ ತೈಲ
ವನ್ನು ಮಾಡಬಾರದು. ಈ ತೈಲವು ಪವಿತ್ರವಾದದ್ದು. ಇದು
ನಿಮಗೆ ಬಹಳ ವಿಶೇಷವಾದದ್ದಾಗಿರಬೇಕು. 33ಯಾವ
ನಾದರೂ ಸುಗಂಧತೈಲವನ್ನು ಈ ಪವಿತ್ರತೈಲದಂತೆ ಮಾಡಿ
ಬೇರೊಬ್ಬನಿಗೆ (ಅಥವಾ ಯಾಜಕನಲ್ಲದ ಒಬ್ಬನಿಗೆ)
ಅದನ್ನು ಕೊಟ್ಟರೆ, ಅವನನ್ನು ಅವನ ಜನರಿಂದ ಬಹಿಷ್ಕರಿಸ
ಬೇಕು.’’

### ಧೂಪ

34ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
‘‘ನೀನು ಹಾಲುಮಡ್ಡಿ, ಗುಗ್ಗುಲ, ಗಂಧದ ಚೆಕ್ಕೆ ಎಂಬ
ಸುಗಂಧದ್ರವ್ಯಗಳನ್ನು ಸಮವಾಗಿ ತೆಗೆದುಕೊ. 35ಸುವಾಸ
ನೆಯುಳ್ಳ ಧೂಪವನ್ನು ಮಾಡುವುದಕ್ಕೆ ಈ ಸುಗಂಧ
ದ್ರವ್ಯಗಳನ್ನು ಒಟ್ಟಾಗಿ ಬೆರೆಸು. ಸುಗಂಧದ್ರವ್ಯಕಾರನು
ಮಾಡುವ ಪ್ರಕಾರವೇ ಇದನ್ನು ಮಾಡು. ಈ ಧೂಪಕ್ಕೆ
ಉಪ್ಪನ್ನು ಬೆರೆಸು. ಉಪ್ಪು ಅದನ್ನು ಶುದ್ಧಗೊಳಿಸುವುದು.
36ಸ್ವಲ್ಪ ಧೂಪವನ್ನು ಅರೆದು ಪುಡಿ ಮಾಡು. ಈ ಪುಡಿ
ಯನ್ನು ದೇವದರ್ಶನ ಗುಡಾರದಲ್ಲಿರುವ ಒಡಂಬಡಿಕೆ
ಪೆಟ್ಟಿಗೆಯ ಮುಂದೆ ನಾನು ನಿನಗೆ ದರ್ಶನ ಕೊಡುವ ಸ್ಥಳ
ದಲ್ಲಿಡು. ಈ ಧೂಪದ ಪುಡಿಯನ್ನು ಅದರ ವಿಶೇಷ
ಉದ್ದೇಶಕ್ಕಾಗಿ ಮಾತ್ರವೇ ಉಪಯೋಗಿಸಬೇಕು. ಅದು
ಅತಿಪರಿಶುದ್ಧವಾದದ್ದು. 37ನೀನು ಈ ಧೂಪವನ್ನು
ಯೆಹೋವನಿಗಾಗಿ ವಿಶೇಷವಾದ ರೀತಿಯಲ್ಲಿ ಮಾತ್ರ
ಉಪಯೋಗಿಸಬೇಕು. ನೀನು ಈ ಧೂಪವನ್ನು ವಿಶೇಷ
ವಾದ ರೀತಿಯಲ್ಲಿ ತಯಾರಿಸಬೇಕು. ಈ ರೀತಿ ವಿಶೇಷ
ವಾಗಿ ಬೇರೆ ಯಾವ ಧೂಪವನ್ನು ಮಾಡಬಾರದು.
38ಸುವಾಸನೆಗೋಸ್ಕರ ಒಬ್ಬನು ತನಗಾಗಿ ಸ್ವಲ್ಪ ಧೂಪ
ವನ್ನು ಈ ರೀತಿಯಲ್ಲಿ ಮಾಡಿದರೆ ಅವನನ್ನು ಅವನ ಜನ
ರಿಂದ ಬಹಿಷ್ಕರಿಸಬೇಕು.’’

### ಬೆಚಲೇಲ್ ಮತ್ತು ಒಹೊಲೀಯಾಬ

31 ತರುವಾಯ ಯೆಹೋವನು ಮೋಶೆಗೆ
ಇಂತೆಂದನು: 2‘‘ನಾನು ಯೆಹೂದ ಕುಲದಿಂದ
ಊರಿಯ ಮಗನಾದ ಬೆಚಲೇಲನನ್ನು ಆರಿಸಿ
ಕೊಂಡಿದ್ದೇನೆ. ಊರಿಯು ಹೂರನ ಮಗನು. 3ನಾನು
ಬೆಚಲೇಲನನ್ನು ದೇವರಾತ್ಮಭರಿತನನ್ನಾಗಿ ಮಾಡಿದ್ದೇನೆ.
ನಾನು ಅವನಿಗೆ ಎಲ್ಲಾ ಬಗೆಯ ಕೆಲಸಗಳನ್ನು ಮಾಡಲು
ನಿಪುಣತೆಯನ್ನೂ ಜ್ಞಾನವನ್ನೂ ಅನುಗ್ರಹಿಸಿದ್ದೇನೆ.
4ಬೆಚಲೇಲನು ಬಹಳ ಉತ್ತಮ ಚಿತ್ರಕಾರನಾಗಿದ್ದಾನೆ.
ಬೆಳ್ಳಿ ಬಂಗಾರಗಳ ಮತ್ತು ತಾಮ್ರದ ವಸ್ತುಗಳನ್ನು ಅವನು
ಮಾಡಬಲ್ಲನು. 5ಅವನು ರತ್ನಗಳನ್ನು ಕೆತ್ತಿ ಅಂದವಾದ
ಆಭರಣಗಳನ್ನು ಮಾಡಬಲ್ಲನು ಮತ್ತು ಮರಗೆಲಸವನ್ನು
ಮಾಡಬಲ್ಲನು. ಅವನು ಎಲ್ಲಾ ತರದ ಕೆಲಸಗಳನ್ನು ಮಾಡ
ಬಲ್ಲನು.

6ಅವನೊಂದಿಗೆ ಕೆಲಸ ಮಾಡಲು ನಾನು ಒಹೊಲೀ
ಯಾಬನನ್ನು ಆರಿಸಿಕೊಂಡಿದ್ದೇನೆ. ಒಹೊಲೀಯಾಬನು
ದಾನ್ ಕುಲದ ಅಹೀಸಾಮಾಕನ ಮಗನು. ನಾನು ನಿನಗೆ
ಆಜ್ಞಾಪಿಸಿದ್ದೆಲ್ಲವನ್ನೂ ಮಾಡುವುದಕ್ಕೆ ಬೇರೆ ಕೆಲಸ
ಗಾರರಿಗೆಲ್ಲಾ ನಿಪುಣತೆಯನ್ನು ಅನುಗ್ರಹಿಸಿದ್ದೇನೆ:

7 ದೇವದರ್ಶನಗುಡಾರ, ಒಡಂಬಡಿಕೆ ಪೆಟ್ಟಿಗೆ,
ಕೃಪಾಸನ, ಗುಡಾರದ ಎಲ್ಲಾ ಉಪಕರಣಗಳು,
8 ಮೇಜು ಮತ್ತು ಅದರ ಮೇಲಿನ ವಸ್ತುಗಳು,
ಬಂಗಾರದದೀಪಸ್ತಂಭಮತ್ತು ಅದರ ಉಪಕರಣ
ಗಳು,
9 ಧೂಪವೇದಿಕೆ, ಯಜ್ಞವೇದಿಕೆ ಮತ್ತು ಅವುಗಳ
ಉಪಕರಣಗಳು. ಗಂಗಾಳ ಮತ್ತು ಅದರ ಪೀಠ.
10 ಯಾಜಕನಾದ ಆರೋನನ ಎಲ್ಲಾ ವಿಶೇಷ
ಬಟ್ಟೆಗಳು, ಆರೋನನ ಪುತ್ರರು ಯಾಜಕರಾಗಿ
ಸೇವೆ ಮಾಡುವಾಗ ಧರಿಸಿಕೊಳ್ಳತಕ್ಕ ಎಲ್ಲಾ
ಬಟ್ಟೆಗಳು .
11 ಸುವಾಸನೆಯುಳ್ಳ ಅಭಿಷೇಕತೈಲ, ಪವಿತ್ರ ಸ್ಥಳದಲ್ಲಿ
ಉಪಯೋಗಿಸುವ ಸುವಾಸನೆ ಯುಳ್ಳ ಧೂಪ.
ನಾನು ನಿನಗೆ ಆಜ್ಞಾಪಿಸಿದ ರೀತಿಯಲ್ಲೇ ಈ
ಕೆಲಸಗಾರರು ಈ ವಸ್ತುಗಳನ್ನೆಲ್ಲಾ ಮಾಡ
ತಕ್ಕದ್ದು.’’

### ಸಬ್ಬತ್

12ತರುವಾಯ ಯೆಹೋವನು ಮೋಶೆಗೆ ಇಂತೆಂದನು:
13‘‘ಇದನ್ನು ಇಸ್ರೇಲರಿಗೆ ಹೇಳು: ‘ನೀವು ನನ್ನ ವಿಶೇಷ
ವಾದ ಸಬ್ಬತ್ ದಿನವನ್ನು ಖಂಡಿತವಾಗಿ ಆಚರಿಸಬೇಕು.
ಯೆಹೋವನಾದ ನಾನು ನಿಮ್ಮನ್ನು ನನ್ನ ವಿಶೇಷ ಜನರ
ನ್ನಾಗಿ ಮಾಡಿರುವುದಕ್ಕೆ ಇದು ಗುರುತಾಗಿದೆ.
14‘‘ಸಬ್ಬತ್ತನ್ನು ವಿಶೇಷ ದಿನವೆಂದು ಪರಿಗಣಿಸಿ ಆಚರಿ
ಸಿರಿ. ಸಬ್ಬತ್ತನ್ನು ಬೇರೆ ದಿನದಂತೆ ಪರಿಗಣಿಸಿ ನಡೆಯು
ವವನಿಗೆ ಮರಣದಂಡನೆಯಾಗಬೇಕು. ಸಬ್ಬತ್ ದಿನದಲ್ಲಿ

ಯಾವನಾದರೂ ಕೆಲಸಮಾಡಿದರೆ ಅವನನ್ನು ಬಹಿಷ್ಕರಿಸ
ಬೇಕು. 15ಕೆಲಸ ಮಾಡುವುದಕ್ಕೆ ವಾರದಲ್ಲಿ ಬೇರೆ ಆರು
ದಿನಗಳಿವೆ. ಆದರೆ ಏಳನೆಯ ದಿನವು ವಿಶ್ರಾಂತಿಯ ಬಹು
ವಿಶೇಷವಾದ ದಿನವಾಗಿದೆ. ಯೆಹೋವನನ್ನು ಸನ್ಮಾನಿ
ಸಲು ಅದೊಂದು ವಿಶೇಷ ದಿನವಾಗಿದೆ. ಸಬ್ಬತ್ತಿನ
ಸಮಯದಲ್ಲಿ ಕೆಲಸಮಾಡುವವನು ಕೊಲ್ಲಲ್ಪಡಬೇಕು.
16ಇಸ್ರೇಲರು ಸಬ್ಬತ್ತನ್ನು ಜ್ಞಾಪಿಸಿಕೊಂಡು ಅದನ್ನು
ವಿಶೇಷ ದಿನವನ್ನಾಗಿ ಮಾಡಿಕೊಳ್ಳತಕ್ಕದ್ದು. ಅವರು
ಇದನ್ನು ಎಂದೆಂದೂ ಮಾಡತಕ್ಕದ್ದು. ಇದು ಎಂದೆಂದಿಗೂ
ಮುಂದುವರಿಯುವ ಒಡಂಬಡಿಕೆಗೆ 17ಸಬ್ಬತ್ ನನಗೂ
ಮತ್ತು ಇಸ್ರೇಲರಿಗೂ ನಡುವೆ ಎಂದೆಂದೂ ಇರುವ
ಸೂಚನೆಯಾಗಿರುವುದು. ಯೆಹೋವನು ಆರು ದಿನಗ
ಳಲ್ಲಿ ಕೆಲಸಮಾಡಿ ಆಕಾಶವನ್ನೂ ಭೂಮಿಯನ್ನೂ
ಉಂಟುಮಾಡಿದನು. ಏಳನೆಯ ದಿನದಲ್ಲಿ ಕೆಲಸ ಮಾಡದೆ
ವಿಶ್ರಮಿಸಿಕೊಂಡನು.'''

18ಹೀಗೆ, ಯೆಹೋವನು ಮೋಶೆಯೊಡನೆ ಸೀನಾಯಿ
ಬೆಟ್ಟದಲ್ಲಿ ಮಾತಾಡುವುದನ್ನು ಮುಗಿಸಿದನು. ಬಳಿಕ
ಯೆಹೋವನು ಒಡಂಬಡಿಕೆ ಬರೆಯಲ್ಪಟ್ಟಿದ್ದ ಎರಡು
ಕಲ್ಲಿನ ಹಲಿಗೆಗಳನ್ನು ಮೋಶೆಗೆ ಕೊಟ್ಟನು. ಅವು ದೇವರ
ಬೆರಳಿನಿಂದ ಲಿಖಿತವಾಗಿತ್ತು.

### ಚಿನ್ನದ ಬಸವ

32 ಬಹಳ ಸಮಯ ದಾಟಿಹೋದರೂ ಮೋಶೆ
ಬೆಟ್ಟದಿಂದ ಕೆಳಗಿಳಿಯಲಿಲ್ಲವಾದ್ದರಿಂದ ಇಸ್ರೇ
ಲರು ಆರೋನನ ಬಳಿಗೆ ಒಟ್ಟಾಗಿ ಬಂದು, ''ನೋಡು,
ಮೋಶೆಯು ನಮ್ಮನ್ನು ಈಜಿಪ್ಟಿನಿಂದ ಹೊರಗೆ ಕರೆದು
ಕೊಂಡು ಬಂದನು. ಆದರೆ ಅವನಿಗೇನಾಯಿತೊ ನಮಗೆ
ತಿಳಿಯದು. ಆದ್ದರಿಂದ ನಮ್ಮನ್ನು ಮುನ್ನಡೆಸಲು ಕೆಲವು
ದೇವರುಗಳನ್ನು ಮಾಡಿಕೊಡು'' ಎಂದು ಹೇಳಿದರು.

2ಆರೋನನು ಅವರಿಗೆ, ''ನಿಮ್ಮ ಹೆಂಡತಿಯ ಮತ್ತು
ಗಂಡುಹೆಣ್ಣುಮಕ್ಕಳಲ್ಲಿರುವ ಚಿನ್ನದ ಓಲೆಗಳನ್ನು ತಂದು
ನನಗೆ ಕೊಡಿರಿ'' ಎಂದು ಹೇಳಿದನು.

3ಆದ್ದರಿಂದ ಅವರೆಲ್ಲರೂ ತಮ್ಮ ಚಿನ್ನದ ಓಲೆಗಳನ್ನು
ತಂದುಕೊಟ್ಟರು. 4ಆರೋನನು ಬಸವನ ಮೂರ್ತಿ
ಯನ್ನು ಚಿನ್ನದಿಂದ ಎರಕಹೊಯ್ಯಿಸಿದನು.

ಬಳಿಕ ಅವರು, ''ಇಸ್ರೇಲರೇ, ನಿಮ್ಮ ದೇವರುಗಳು
ಇಲ್ಲಿವೆ! ನಿಮ್ಮನ್ನು ಈಜಿಪ್ಟಿನಿಂದ ಕರೆದುಕೊಂಡು ಬಂದ
ದೇವರುಗಳು ಇವುಗಳೇ'' ಎಂದು ಹೇಳಿದರು.

5ಆರೋನನು ಇವೆಲ್ಲವನ್ನು ನೋಡಿ, ಬಸವನ ಮುಂದೆ
ಒಂದು ಯಜ್ಞವೇದಿಕೆಯನ್ನು ಕಟ್ಟಿಸಿದನು. ಬಳಿಕ, ''ನಾಳೆ
ಯೆಹೋವನನ್ನು ಸನ್ಮಾನಿಸಲು ಒಂದು ವಿಶೇಷ ಹಬ್ಬ
ವಿರುವುದು'' ಎಂದು ಪ್ರಕಟಿಸಿದನು.

6ಮರುದಿನ ಮುಂಜಾನೆ ಜನರೆಲ್ಲರೂ ಬೇಗನೆ ಎದ್ದು
ತಮ್ಮ ಪಶುಗಳನ್ನು ವಧಿಸಿ ಸರ್ವಾಂಗ ಹೋಮಗಳನ್ನಾ
ಗಿಯೂ ಸಮಾಧಾನಯಜ್ಞಗಳನ್ನಾಗಿಯೂ ಅರ್ಪಿಸಿ ತಿನ್ನು
ವುದಕ್ಕೂ ಕುಡಿಯುವುದಕ್ಕೂ ಕುಳಿತುಕೊಂಡರು. ಬಳಿಕ
ಎದ್ದು ಕುಣಿದಾಡಿದರು ಮತ್ತು ಕೂಗಾಡಿದರು.

7ಅದೇ ಸಮಯದಲ್ಲಿ ಯೆಹೋವನು ಮೋಶೆಗೆ,
''ಬೆಟ್ಟದಿಂದ ಇಳಿದುಹೋಗು. ನೀನು ಈಜಿಪ್ಟಿನಿಂದ
ಕರೆದುಕೊಂಡು ಬಂದ ನಿನ್ನ ಜನರು ಭಯಂಕರವಾದ
ಪಾಪ ಮಾಡಿದ್ದಾರೆ. 8ನಾನು ಅವರಿಗೆ ಆಜ್ಞಾಪಿಸಿದವು
ಗಳಿಗೆ ಬಹುಬೇಗನೆ ಅವಿಧೇಯರಾಗಿದ್ದಾರೆ. ಚಿನ್ನವನ್ನು
ಕರಗಿಸಿ ಅದರಿಂದ ಬಸವನನ್ನು ಮಾಡಿಕೊಂಡು ಅದನ್ನು
ಪೂಜಿಸುತ್ತಾ ಅದಕ್ಕೆ ಯಜ್ಞಗಳನ್ನು ಸಮರ್ಪಿಸುತ್ತಿದ್ದಾರೆ.
'ಇಸ್ರೇಲರೇ ನಿಮ್ಮನ್ನು ಈಜಿಪ್ಟಿನಿಂದ ಕರೆದುಕೊಂಡು
ಬಂದ ದೇವರುಗಳು ಇವುಗಳು' ಎಂದು ಜನರು ಹೇಳು
ತ್ತಿದ್ದಾರೆ'' ಎಂದನು.

9ಯೆಹೋವನು ಮೋಶೆಗೆ, ''ನಾನು ಈ ಜನರನ್ನು
ನೋಡಿದ್ದೇನೆ. ಅವರು ಬಹಳ ಮೊಂಡರೆಂದು ನಾನು
ಬಲ್ಲೆನು. ಅವರು ಯಾವಾಗಲೂ ನನಗೆ ವಿರೋಧವಾಗಿ
ದಂಗೆ ಏಳುವರು.''

10''ಆದ್ದರಿಂದ ನಾನು ಅವರನ್ನು ಕೋಪದಿಂದ ನಾಶ
ಮಾಡಿಬಿಡುತ್ತೇನೆ. ನನ್ನನ್ನು ತಡೆಯಬೇಡ. ಬಳಿಕ ನಾನು
ನಿನ್ನಿಂದ ಒಂದು ಮಹಾಜನಾಂಗವನ್ನು ಉಂಟು
ಮಾಡುವೆನು'' ಎಂದು ಹೇಳಿದನು.

11ಆದರೆ ಮೋಶೆಯು ತನ್ನ ದೇವರಾದ ಯೆಹೋವ
ನಿಗೆ, ''ಯೆಹೋವನೇ, ನಿನ್ನ ಕೋಪವು ನಿನ್ನ ಜನರನ್ನು
ನಾಶಮಾಡದಿರಲಿ. ನಿನ್ನ ಮಹಾಶಕ್ತಿಯಿಂದಲೂ ಬಲ
ದಿಂದಲೂ ಈ ಜನರನ್ನು ಈಜಿಪ್ಟಿನಿಂದ ಹೊರಗೆ ಕರೆದು
ಕೊಂಡು ಬಂದೆಯಲ್ಲಾ. 12ಆದರೆ ನೀನು ನಿನ್ನ ಜನರನ್ನು
ನಾಶ ಮಾಡಿದರೆ, ಈಜಿಪ್ಟಿನವರು, 'ಯೆಹೋವನು ತನ್ನ
ಜನರಿಗೆ ಕೇಡನ್ನು ಮಾಡುವುದಕ್ಕಾಗಿಯೇ ಈಜಿಪ್ಟಿನಿಂದ
ಕರೆದುಕೊಂಡು ಹೋದನು. ಆತನು ಅವರನ್ನು ಬೆಟ್ಟ
ಗಳಲ್ಲಿ ಕೊಲ್ಲಬೇಕೆಂದಿದ್ದನು; ತನ್ನ ಜನರನ್ನು ಭೂಮಿ
ಯಿಂದ ನಿರ್ಮೂಲ ಮಾಡಬೇಕೆಂದಿದ್ದನು' ಎಂದು
ಹೇಳುವರು. ಆದ್ದರಿಂದ ನಿನ್ನ ಜನರ ಮೇಲೆ ಕೋಪ
ಗೊಳ್ಳಬೇಡ. ನಿನ್ನ ಕೋಪವನ್ನು ಬಿಟ್ಟುಬಿಡು. ನಿನ್ನ ಜನ
ರನ್ನು ನಾಶಮಾಡಬೇಡ. 13ನಿನ್ನ ಸೇವೆ ಮಾಡಿದ
ಅಬ್ರಹಾಮನನ್ನು, ಇಸಾಕನನ್ನು, ಇಸ್ರೇಲನನ್ನು
(ಯಾಕೋಬನನ್ನು) ಜ್ಞಾಪಿಸಿಕೊ. ನೀನು ನಿನ್ನ ಹೆಸರನ್ನು
ಉಪಯೋಗಿಸಿ ಆ ಜನರಿಗೆ ವಾಗ್ದಾನವನ್ನು ಮಾಡಿದೆ.
'ನಾನು ನಿನ್ನ ಸಂತತಿಯವರನ್ನು ಆಕಾಶದ ನಕ್ಷತ್ರಗಳಷ್ಟು
ಮಾಡುವೆನು. ನಾನು ಅವರಿಗೆ ವಾಗ್ದಾನ ಮಾಡಿದಂತೆ ಈ
ದೇಶವನ್ನೆಲ್ಲಾ ನಿನ್ನ ಸಂತತಿಗಳವರಿಗೆ ಕೊಡುವೆನು. ಈ

ದೇಶ ಎಂದೆಂದಿಗೂ ಅವರದಾಗಿರುವುದು' ಎಂದು ನೀನು
ನಿನ್ನ ಹೆಸರಿನಲ್ಲಿ ವಾಗ್ದಾನಮಾಡಿದೆಯಲ್ಲಾ'' ಅಂದನು.
14ಆದ್ದರಿಂದ ಯೆಹೋವನು ಜನರಿಗಾಗಿ ಮರುಕ
ಪಟ್ಟು ತನ್ನ ಮನಸ್ಸನ್ನು ಮಾರ್ಪಡಿಸಿಕೊಂಡನು; ತಾನು
ಹೇಳಿದ್ದ ಕೇಡನ್ನು ಮಾಡಲಿಲ್ಲ; ತನ್ನ ಜನರನ್ನು ನಾಶ
ಮಾಡಲಿಲ್ಲ.
15ಬಳಿಕ ಮೋಶೆ ಬೆಟ್ಟದಿಂದಿಳಿದು ಹೋದನು. ಮೋಶೆ
ಯೊಡನೆ ಆಜ್ಞಾಶಾಸನಗಳ ಎರಡು ಕಲ್ಲಿನ ಹಲಿಗೆಗ
ಳಿದ್ದವು. ಈ ಆಜ್ಞಾಶಾಸನಗಳ ಕಲ್ಲುಗಳ ಮುಂದೆಯೂ
ಹಿಂದೆಯೂ ಬರೆಯಲ್ಪಟ್ಟಿದ್ದವು. 16ಯೆಹೋವನು
ತಾನೇ ಆ ಕಲ್ಲುಗಳನ್ನು ಮಾಡಿ ಅವುಗಳ ಮೇಲೆ
ಬರೆದಿದ್ದನು.
17ಇಸ್ರೇಲರ ಗದ್ದಲವನ್ನೂ ಕೂಗಾಟವನ್ನೂ
ಯೆಹೋಶುವನು ಕೇಳಿ ಮೋಶೆಗೆ, ''ಪಾಳೆಯದ ಕಡೆ
ಯಿಂದ ಯುದ್ಧದ ಧ್ವನಿ ಕೇಳಿಬರುತ್ತಿದೆ'' ಅಂದನು.
18ಅದಕ್ಕೆ ಮೋಶೆ, ''ಅದು ಸೈನ್ಯದ ಜಯಧ್ವನಿಯಲ್ಲ.
ಅದು ಸೋಲಿನಿಂದ ಕೂಗುವ ಸೈನ್ಯದ ಧ್ವನಿಯೂ ಅಲ್ಲ.
ನಾನು ಕೇಳುತ್ತಿರುವುದು ಗೋಷ್ಠಿಯ ಧ್ವನಿ'' ಎಂದು
ಉತ್ತರಿಸಿದನು.
19ಮೋಶೆಯು ಪಾಳೆಯದ ಹತ್ತಿರಕ್ಕೆ ಬಂದನು. ಅವನು
ಚಿನ್ನದ ಬಸವನನ್ನೂ ಜನರ ನರ್ತನವನ್ನೂ ನೋಡಿ ಬಹು
ಕೋಪಗೊಂಡು ಕಲ್ಲಿನ ಹಲಿಗೆಗಳನ್ನು ನೆಲದ ಮೇಲೆ
ಬಿಸಾಡಿಬಿಟ್ಟನು; ಅವು ಚೂರುಚೂರಾಗಿ ಒಡೆದು
ಹೋದವು. 20ಬಳಿಕ ಮೋಶೆಯು ಆ ಬಸವನ ಮೂರ್ತಿ
ಯನ್ನು ಬೆಂಕಿಯಲ್ಲಿ ಕರಗಿಸಿ ಅದರ ಚಿನ್ನವನ್ನು ಧೂಳಿ
ನಂತೆ ಅರೆದು ನೀರಿಗೆ ಹಾಕಿ ಆ ನೀರನ್ನು ಇಸ್ರೇಲರಿಗೆ
ಕುಡಿಸಿದನು.
21ಮೋಶೆಯು ಆರೋನನಿಗೆ, ''ಈ ಜನರು ನಿನಗೇನು
ಮಾಡಿದರು? ಇಂಥಾ ಕೆಟ್ಟ ಪಾಪವನ್ನು ಮಾಡುವಂತೆ
ಯಾಕೆ ಅವರನ್ನು ನಡಿಸಿದೆ?'' ಎಂದು ಹೇಳಿದನು.
22ಆರೋನನು, ''ಕೋಪಗೊಳ್ಳಬೇಡ. ಇವರು
ಯಾವಾಗಲೂ ಪಾಪಮಾಡಲು ಸಿದ್ಧರಾಗಿರುವುದು ನಿನಗೆ
ಗೊತ್ತೇ ಇದೆ. 23ಅವರು ನನಗೆ 'ಮೋಶೆಯು ನಮ್ಮನ್ನು
ಈಜಿಪ್ಟಿನಿಂದ ಹೊರಗೆನಡೆಸಿದನು. ಆದರೆ ಅವನಿಗೇ
ನಾಯಿತೊ ನಮಗೆ ತಿಳಿಯದು. ಆದ್ದರಿಂದ ನಮ್ಮನ್ನು
ಮುನ್ನಡೆಸಲು ದೇವರುಗಳನ್ನು ಮಾಡಿಕೊಡು' ಎಂದು
ಕೇಳಿದರು. 24ಆದ್ದರಿಂದ ನಾನು ಅವರಿಗೆ, ''ನಿಮ್ಮಲ್ಲಿ
ಚಿನ್ನದ ಆಭರಣಗಳಿದ್ದರೆ ನನಗೆ ಕೊಡಿರಿ' ಎಂದು ಹೇಳಿ
ದೆನು. ಅವರು ಆಭರಣಗಳನ್ನು ನನಗೆ ತಂದುಕೊಟ್ಟರು.
ನಾನು ಅವುಗಳನ್ನು ಬೆಂಕಿಯಲ್ಲಿ ಕರಗಿಸಿ ಈ ಬಸವನ
ಮೂರ್ತಿಯನ್ನು ಎರಕಹೊಯ್ದೆನು'' ಎಂದು
ಉತ್ತರಿಸಿದನು.
25ಜನರು ಅಂಕೆತಪ್ಪಿ ತಮ್ಮ ಇಷ್ಟಬಂದಂತೆ ಮಾಡುವು
ದಕ್ಕೆ ಆರೋನನು ಅವರನ್ನು ಬಿಟ್ಟುಬಿಟ್ಟಿರುವುದು
ಮೋಶೆಗೆ ತಿಳಿಯಿತು. ಜನರು ಕ್ರಮವಿಲ್ಲದೆ ಸ್ವೇಚ್ಛೆಯಿಂದ
ನಡೆಯುತ್ತಿದ್ದರು; ಅವರ ಮೂರ್ಖತನವು ಅವರ
ವಿರೋಧಿಗಳಿಗೆ ಎದ್ದು ಕಾಣುತ್ತಿತ್ತು! 26ಆದ್ದರಿಂದ ಪಾಳೆ
ಯದ ದ್ವಾರದಲ್ಲಿ ಮೋಶೆಯು ನಿಂತು, ''ಯೆಹೋವನ
ಪಕ್ಷದವರು ನನ್ನ ಬಳಿಗೆ ಬರಬೇಕು'' ಎಂದು ಹೇಳಿದನು.
ಲೇವಿ ಕುಲದವರೆಲ್ಲಾ ಮೋಶೆಯ ಬಳಿಗೆ ಬಂದರು.
27ಆಗ ಮೋಶೆ ಅವರಿಗೆ, ''ಇಸ್ರೇಲರ ದೇವರಾದ
ಯೆಹೋವನು ಹೇಳುವುದನ್ನು ನಿಮಗೆ ತಿಳಿಸುತ್ತೇನೆ!
'ನಿಮ್ಮಲ್ಲಿ ಪ್ರತಿಯೊಬ್ಬನು ಕತ್ತಿಯನ್ನು ತೆಗೆದುಕೊಂಡು
ಪಾಳೆಯದ ಒಂದು ಕೊನೆಯಿಂದ ಇನ್ನೊಂದು ಕೊನೆಯ
ವರೆಗೆ ಹೋಗಿ ಜನರನ್ನು ಶಿಕ್ಷಿಸಬೇಕು. ನಿಮ್ಮ ಸಹೋದ
ರರಾಗಿದ್ದರೂ ಸ್ನೇಹಿತರಾಗಿದ್ದರೂ ಅಥವಾ ನೆರೆಯವ
ರಾಗಿದ್ದರೂ ಸರಿ, ಕೊಲ್ಲಿರಿ''' ಎಂದು ಹೇಳಿದನು.
28ಲೇವಿಕುಲದವರು ಮೋಶೆಯ ಮಾತಿಗೆ ವಿಧೇಯ
ರಾದರು. ಅಂದು ಇಸ್ರೇಲರಲ್ಲಿ ಸುಮಾರು ಮೂರು
ಸಾವಿರ ಮಂದಿ ಸತ್ತರು. 29ಆಗ ಮೋಶೆಯು ಅವರಿಗೆ,
''ಇಂದು ನೀವು ಯೆಹೋವನಿಗೆ ಮೀಸಲಾದ ಜನ
ರಾದಿರಿ; ಯಾಕಂದರೆ ನೀವು ನಿಮ್ಮ ಸ್ವಂತ ಗಂಡು ಮಗ
ನಿಗೂ ಸಹೋದರನಿಗೂ ವಿರೋಧವಾದಿರಿ. ಇಂದು
ಆತನು ನಿಮ್ಮನ್ನು ಆಶೀರ್ವದಿಸಿದ್ದಾನೆ'' ಅಂದನು.
30ಮರುದಿನ ಮುಂಜಾನೆ ಮೋಶೆಯು ಜನರಿಗೆ,
''ನೀವು ಭಯಂಕರವಾದ ಪಾಪವನ್ನು ಮಾಡಿದ್ದೀರಿ.
ಆದರೆ ಈಗ ನಾನು ಯೆಹೋವನ ಬಳಿಗೆ ಹೋಗಿ, ಆತನು
ನಿಮ್ಮ ಪಾಪಗಳನ್ನು ಕ್ಷಮಿಸುವಂತೆ ನಾನೇನಾದರೂ
ಮಾಡಬಹುದೊ ಎಂದು ವಿಚಾರಿಸುತ್ತೇನೆ'' ಎಂದನು.
31ಅಂತೆಯೇ ಮೋಶೆಯು ಯೆಹೋವನ ಬಳಿಗೆ ಮರಳಿ
ಹೋಗಿ, ''ದಯವಿಟ್ಟು ಆಲಿಸು! ಈ ಜನರು ಬಹಳ ಕೆಟ್ಟ
ಪಾಪವನ್ನು ಮಾಡಿದ್ದಾರೆ. ಚಿನ್ನದಿಂದ ಮೂರ್ತಿಯನ್ನು
ಮಾಡಿಕೊಂಡಿದ್ದಾರೆ. 32ಅವರ ಈ ಪಾಪವನ್ನು ಕ್ಷಮಿಸು.
ನೀನು ಅವರನ್ನು ಕ್ಷಮಿಸುವುದಿಲ್ಲವಾದರೆ ನಿನ್ನ ಜೀವ
ಭಾದ್ಯರ ಪುಸ್ತಕದಿಂದ ನನ್ನ ಹೆಸರನ್ನು ಅಳಿಸಿಬಿಡು''
ಎಂದು ಪ್ರಾರ್ಥಿಸಿದನು.
33ಆದರೆ ಯೆಹೋವನು ಮೋಶೆಗೆ, ''ನನಗೆ ವಿರೋಧ
ವಾಗಿ ಪಾಪಮಾಡುವ ಜನರ ಹೆಸರನ್ನು ಮಾತ್ರವೇ ನನ್ನ
ಪುಸ್ತಕದಿಂದ ಅಳಿಸುತ್ತೇನೆ. 34ಆದ್ದರಿಂದ ಈಗ ಕೆಳಗಿಳಿದು
ನಾನು ನಿನಗೆ ಹೇಳುವಲ್ಲಿಗೆ ಜನರನ್ನು ನಡಿಸು. ನನ್ನ
ದೂತನು ನಿನ್ನ ಮುಂದೆ ಹೋಗಿ ನಿನ್ನನ್ನು ನಡಿಸುವನು.
ಪಾಪ ಮಾಡಿದ ಜನರನ್ನು ಶಿಕ್ಷಿಸುವ ಸಮಯ ಬಂದಾಗ
ಅವರು ಶಿಕ್ಷಿಸಲ್ಪಡುವರು'' ಎಂದು ಹೇಳಿದನು. 35ಆದ್ದ
ರಿಂದ ಯೆಹೋವನು ಜನರಿಗೆ ಭಯಂಕರವಾದ

ವ್ಯಾಧಿಯನ್ನು ಬರಮಾಡಿದನು. ಅವರು ಆರೋನನಿಂದ ಬಸವನನ್ನು ಮಾಡಿಸಿಕೊಂಡದ್ದೇ ಇದಕ್ಕೇ ಕಾರಣ.

### ‘‘ನಾನು ನಿಮ್ಮೊಂದಿಗೆ ಬರುವುದಿಲ್ಲ.’’

33 ತರುವಾಯ ಯೆಹೋವನು ಮೋಶೆಗೆ, ‘‘ನೀನು ಮತ್ತು ಈಜಿಪ್ಟಿನಿಂದ ನೀನು ಕರೆದುಕೊಂಡು ಬಂದ ಜನರು ಈ ಸ್ಥಳವನ್ನು ಬಿಡಬೇಕು. ನಾನು ಅಬ್ರಹಾಮ ನಿಗೆ, ಇಸಾಕನಿಗೆ ಮತ್ತು ಯಾಕೋಬನಿಗೆ ವಾಗ್ದಾನ ಮಾಡಿದ ದೇಶಕ್ಕೆ ಹೋಗಿ. ನಾನು ಅವರಿಗೆ ‘ನಿಮ್ಮ ನಂತರ ಜೀವಿಸುವ ನಿಮ್ಮ ಸಂತತಿಯವರಿಗೆ ಆ ದೇಶವನ್ನು ಕೊಡು ವೆನು’ ಎಂದು ನಾನು ಅವರಿಗೆ ವಾಗ್ದಾನ ಮಾಡಿದ್ದೇನೆ.
2 ನಿಮ್ಮ ಮುಂದೆ ಹೋಗುವುದಕ್ಕೆ ನಾನು ಒಬ್ಬ ದೂತನನ್ನು ಕಳುಹಿಸುವೆನು. ಕಾನಾನ್ಯರನ್ನು, ಅಮೋರಿಯರನ್ನು, ಹಿತ್ತಿಯರನ್ನು, ಪೆರಿಜೀಯರನ್ನು ಹಿವ್ವಿಯರನ್ನು ಮತ್ತು ಯೆಬೂಸಿಯರನ್ನು ನಾನು ಸೋಲಿಸುವೆನು. ನಿಮ್ಮ ದೇಶ ದಿಂದ ಅವರನ್ನು ಬಲವಂತದಿಂದ ಅಟ್ಟಿಬಿಡುವೆನು.
3 ಆದ್ದ ರಿಂದ ಸಮೃದ್ಧಿಕರವಾದ ಆ ದೇಶಕ್ಕೆ ಹೋಗಿರಿ. ಆದರೆ ನಾನು ನಿಮ್ಮೊಂದಿಗೆ ಬರುವುದಿಲ್ಲ. ನೀವು ನನ್ನ ಆಜ್ಞೆಗೆ ವಿಧೇಯರಾಗದೆ ನನ್ನನ್ನು ಕೋಪಗೊಳಿಸುತ್ತೀರಿ. ನಾನು ನಿಮ್ಮೊಂದಿಗೆ ಬಂದರೆ, ದಾರಿಯಲ್ಲಿ ನಿಮ್ಮನ್ನು ಸಂಹರಿ ಸುವೆನು’’ ಎಂದು ಹೇಳಿದನು.

4 ಈ ದುಃಖದ ಸಮಾಚಾರವನ್ನು ಕೇಳಿ ಜನರು ನೊಂದುಕೊಂಡರು. ಅವರಲ್ಲಿ ಒಬ್ಬರಾದರೂ ತಮ್ಮ ಆಭರಣಗಳನ್ನು ಧರಿಸಿಕೊಳ್ಳಲಿಲ್ಲ.
5 ಯೆಹೋವನು ಮೋಶೆಗೆ, ‘‘ಇಸ್ರೇಲರಿಗೆ ಹೀಗೆಂದು ಹೇಳು: ನೀವು ಅವಿ ಧೇಯರಾದ ಜನರಾಗಿದ್ದೀರಿ. ನಾನು ನಿಮ್ಮೊಡನೆ ಕ್ಷಣ ಹೊತ್ತು ಸಂಚರಿಸಿದರೆ, ನಿಮ್ಮನ್ನು ಸಂಹರಿಸುವೆನು. ಆದ್ದ ರಿಂದ ನಿಮ್ಮೆಲ್ಲಾ ಆಭರಣಗಳನ್ನು ತೆಗೆದುಬಿಡಿರಿ. ನೀವು ಮಾಡಬೇಕಾದದ್ದನ್ನು ನಾನೇ ತಿಳಿಸುವೆನು!’’ ಎಂದು ಹೇಳಿದನು.
6 ಇಸ್ರೇಲರು ಹೋರೇಬ್ (ಸೀನಾಯಿ) ಬೆಟ್ಟ ದಲ್ಲಿದ್ದಾಗ ಆಭರಣಗಳನ್ನು ಧರಿಸಿಕೊಳ್ಳುವುದನ್ನು ಬಿಟ್ಟು ಬಿಟ್ಟರು.

### ತಾತ್ಕಾಲಿಕ ದೇವದರ್ಶನಗುಡಾರ

7 ಮೋಶೆಯು ಗುಡಾರವನ್ನು ಪಾಳೆಯದ ಹೊರಗೆ ಸ್ವಲ್ಪದೂರ ತೆಗೆದುಕೊಂಡು ಹೋಗುತ್ತಿದ್ದನು. ಮೋಶೆಯು ಅದನ್ನು, ‘‘ದೇವದರ್ಶನದ ಗುಡಾರ* ಎಂದು ಕರೆದನು. ಯೆಹೋವನಿಂದ ಉತ್ತರವನ್ನು ಕೇಳ ಬೇಕೆಂದು ಬಯಸುವ ವ್ಯಕ್ತಿಯು ಪಾಳೆಯದ ಹೊರಗಿದ್ದ ದೇವದರ್ಶನ ಗುಡಾರಕ್ಕೆ ಹೋಗುತ್ತಿದ್ದನು.
8 ಮೋಶೆಯು ಆ ಗುಡಾರದೊಳಗೆ ಹೋಗುವಾಗ ಜನ ರೆಲ್ಲರೂ ಅವನನ್ನು ಗಮನಿಸುತ್ತಿದ್ದರು. ಜನರು ತಮ್ಮ ಡೇರೆಗಳ ದ್ವಾರಗಳಲ್ಲಿ ನಿಂತುಕೊಂಡು ಮೋಶೆಯು ದೇವದರ್ಶನ ಗುಡಾರಕ್ಕೆ ಪ್ರವೇಶಿಸುವವರೆಗೆ ಅವನನ್ನು ಗಮನಿಸುತ್ತಿದ್ದರು.
9 ಮೋಶೆಯು ಗುಡಾರದೊಳಕ್ಕೆ ಹೋದಾಗ ಎತ್ತರವಾದ ಮೇಘಸ್ತಂಭವು ಯಾವಾಗಲೂ ಕೆಳಗಿಳಿಯುತ್ತಿತ್ತು. ಆ ಮೇಘಸ್ತಂಭವು ಗುಡಾರದ ದ್ವಾರ ದಲ್ಲಿ ನಿಲ್ಲುತ್ತಿತ್ತು. ಹೀಗೆ ಯೆಹೋವನು ಮೋಶೆಯೊಡನೆ ಮಾತಾಡುತ್ತಿದ್ದನು.
10 ಗುಡಾರದ ದ್ವಾರದಲ್ಲಿ ಮೇಘ ಸ್ತಂಭವಿರುವುದನ್ನು ಜನರು ನೋಡಿದಾಗ, ಅವರು ತಮ್ಮ ಸ್ವಂತ ಗುಡಾರಗಳ ದ್ವಾರದಲ್ಲಿ ತಲೆಬಾಗಿ ಯೆಹೋವ ನನ್ನು ಆರಾಧಿಸುತ್ತಿದ್ದರು.

11 ಯೆಹೋವನು ಮೋಶೆಯೊಂದಿಗೆ ಮುಖಾಮುಖಿ ಯಾಗಿ ಮಾತಾಡುತ್ತಿದ್ದನು. ಒಬ್ಬನು ತನ್ನ ಸ್ನೇಹಿತ ನೊಂದಿಗೆ ಮಾತಾಡುವಂತೆ ಯೆಹೋವನು ಮೋಶೆ ಯೊಂದಿಗೆ ಮಾತಾಡುತ್ತಿದ್ದನು. ಯೆಹೋವನೊಂದಿಗೆ ಮಾತಾಡಿದ ನಂತರ ಮೋಶೆಯು ಪಾಳೆಯಕ್ಕೆ ಮರಳಿ ಹೋಗುತ್ತಿದ್ದನು. ನೂನನ ಮಗನೂ ಯೌವನಸ್ಥನೂ ಆಗಿದ್ದ ಯೆಹೋಶುವನು ಮೋಶೆಯ ಸಹಾಯಕನಾಗಿ ದ್ದನು. ಮೋಶೆಯು ಗುಡಾರವನ್ನು ಬಿಟ್ಟುಹೋದಾಗ ಯೆಹೋಶುವನು ಗುಡಾರದಲ್ಲಿಯೇ ಇರುತ್ತಿದ್ದನು.

### ಮೋಶೆಯು ಯೆಹೋವನ ಮಹಿಮೆಯನ್ನು ನೋಡುವನು

12 ಮೋಶೆಯು ಯೆಹೋವನಿಗೆ, ‘‘ಈ ಜನರನ್ನು ಮುನ್ನಡೆಸಬೇಕೆಂದು ನೀನು ನನಗೆ ಹೇಳಿರುವೆ. ಆದರೆ ನನ್ನೊಂದಿಗೆ ಯಾರನ್ನು ಕಳುಹಿಸುತ್ತೀಯೆಂದು ನೀನು ಹೇಳಲಿಲ್ಲ. ನೀನು ನನಗೆ, ‘ನಾನು ನಿನ್ನನ್ನು ಚೆನ್ನಾಗಿ ಬಲ್ಲೆನು. ನಾನು ನಿನ್ನನ್ನು ಮೆಚ್ಚಿದ್ದೇನೆ’ ಎಂದು ಹೇಳಿದೆ.
13 ನಾನು ನಿನ್ನನ್ನು ನಿಜವಾಗಿಯೂ ಮೆಚ್ಚಿಸಿರುವುದಾದರೆ, ನಾನು ನಿನ್ನನ್ನು ತಿಳಿದುಕೊಳ್ಳುವಂತೆ ನಿನ್ನ ಮಾರ್ಗಗಳನ್ನು ಬೋಧಿಸು. ಆಗ ನಾನು ನಿನ್ನನ್ನು ಯಾವಾಗಲೂ ಮೆಚ್ಚಿ ಸಲು ಸಾಧ್ಯವಾಗುವುದು. ಇವರೆಲ್ಲರೂ ನಿನ್ನ ಜನರೆಂದು ಜ್ಞಾಪಕಮಾಡಿಕೊ’’ ಎಂದು ವಿಜ್ಞಾಪಿಸಿದನು.
14 ಯೆಹೋವನು‘‘ನಾನೇ ನಿಮ್ಮೊಡನೆ ಬರುವೆನು. ನಾನೇ ನಿಮ್ಮನ್ನು ಮುನ್ನಡೆಸುವೆನು’’’* ಎಂದು ಉತ್ತರಿಸಿದನು.
15 ಆಗ ಮೋಶೆ ಯೆಹೋವನಿಗೆ, ‘‘ನೀನು ನಮ್ಮೊಂದಿಗೆ ಬರದಿದ್ದರೆ, ಈ ಸ್ಥಳದಿಂದ ನಮ್ಮನ್ನು ಕಳುಹಿಸಬೇಡ.
16 ಮಾತ್ರವಲ್ಲದೆ ನನಗೂ ಈ ಜನರಿಗೂ ನಿನ್ನ ದಯೆ ದೊರಕಿದೆಯೆಂದು ನಾವು ತಿಳಿದುಕೊಳ್ಳುವುದಾದರೂ

---

**ದೇವದರ್ಶನದ ಗುಡಾರ** ಬಹುಶಃ ನಿಜವಾದ ದೇವದರ್ಶನ ಗುಡಾರ ವನ್ನು ನಿರ್ಮಿಸುವ ಮೊದಲು ಮೋಶೆಯು ಈ ಗುಡಾರವನ್ನು ಉಪ ಯೋಗಿಸಿದನು.

**ಮುನ್ನಡೆಸುವೆನು** ಅಥವಾ ‘‘ವಿಶ್ರಾಂತಿ ಕೊಡುವೆನು.’’

ಹೇಗೆ? ನೀನು ನಮ್ಮೊಡನೆ ಬಂದರೆ, ಆಗ ನಾವು ಇದನ್ನು
ಖಚಿತವಾಗಿ ತಿಳಿದುಕೊಳ್ಳುವೆವು. ನೀನು ನಮ್ಮೊಡನೆ ಬಾರ
ದಿದ್ದರೆ, ಆಗ ನಮಗೂ ಭೂಮಿಯ ಮೇಲಿರುವ ಇತರ
ಜನರಿಗೂ ಯಾವ ವ್ಯತ್ಯಾಸವಿರುವುದಿಲ್ಲ'' ಎಂದು
ಹೇಳಿದನು. [17]ಆಗ ಯೆಹೋವನು ಮೋಶೆಗೆ, ''ನಿನ್ನ
ಕೋರಿಕೆಯನ್ನು ಅನುಗ್ರಹಿಸುತ್ತೇನೆ. ನಾನು ನಿನ್ನನ್ನು
ಮೆಚ್ಚಿಕೊಂಡದ್ದರಿಂದಲೇ ಇದನ್ನು ಮಾಡುತ್ತೇನೆ. ನಾನು
ನಿನ್ನನ್ನು ಚೆನ್ನಾಗಿ ಬಲ್ಲೆನು'' ಅಂದನು.

[18]ಬಳಿಕ ಮೋಶೆ, ''ಈಗ ದಯವಿಟ್ಟು ನಿನ್ನ ಮಹಿಮೆ
ಯನ್ನು ನನಗೆ ತೋರಿಸು'' ಅಂದನು.

[19]ಆಗ ಯೆಹೋವನು ''ನನ್ನ ನಾಮದ ಮಹತ್ವವನ್ನು
ನಿನ್ನ ಮುಂದೆ ದಾಟಿಹೋಗುವಂತೆ ಮಾಡುವೆನು. ನಾನೇ
ಯೆಹೋವನು. ನಿನಗೆ ಕೇಳಿಸುವಂತೆ ನನ್ನ ಹೆಸರನ್ನು ಪ್ರಕ
ಟಿಸುವೆನು. ನಾನು ಆರಿಸಿಕೊಂಡ ಜನರಿಗೆ ದಯೆಯನ್ನೂ
ಪ್ರೀತಿಯನ್ನೂ ಅನುಗ್ರಹಿಸುವೆನು. [20]ನನ್ನನ್ನು ಯಾರೂ
ಮುಖಾಮುಖಿಯಾಗಿ ಕಾಣಲು ಸಾಧ್ಯವಿಲ್ಲ. ನನ್ನನ್ನು
ನೋಡಿದ ಯಾವನೂ ಬದುಕಲಾರನು.

[21]''ಇಲ್ಲಿ ಒಂದು ಬಂಡೆ ಇದೆ. ನೀನು ಆ ಬಂಡೆಯ
ಮೇಲೆ ನಿಂತುಕೊ. [22]ನನ್ನ ಮಹಿಮೆಯು ಆ ಸ್ಥಳದ
ಮೂಲಕ ದಾಟಿಹೋಗುವುದು. ನಾನು ನಿನ್ನನ್ನು ಆ
ಬಂಡೆಯ ದೊಡ್ಡದಾದ ಬಿರುಕಿನಲ್ಲಿ ಇರಿಸುವೆನು; ನಾನು
ದಾಟಿಹೋಗುವಾಗ ನನ್ನ ಕೈಯಿಂದ ನಿನ್ನನ್ನು
ಮುಚ್ಚುವೆನು. [23]ಬಳಿಕ ನನ್ನ ಕೈಯನ್ನು ತೆಗೆಯುವೆನು.
ಆಗ ನೀನು ನನ್ನ ಹಿಂಭಾಗವನ್ನು ನೋಡುವೆ; ಆದರೆ ನನ್ನ
ಮುಖವು ನಿನಗೆ ಕಾಣಿಸದು'' ಎಂದು ಉತ್ತರ ಕೊಟ್ಟನು.

### ಹೊಸ ಕಲ್ಲಿನ ಹಲಿಗೆಗಳು

34 ತರುವಾಯ ಯೆಹೋವನು ಮೋಶೆಗೆ,
''ಒಡೆದುಹೋದ ಮೊದಲಿನ ಎರಡು ಕಲ್ಲಿನ
ಹಲಗೆಗಳಂತೆ ಇನ್ನೆರಡು ಕಲ್ಲಿನ ಹಲಿಗೆಗಳನ್ನು ಮಾಡು.
ಮೊದಲಿನ ಕಲ್ಲುಗಳಲ್ಲಿ ಬರೆದಿದ್ದ ಮಾತುಗಳನ್ನೇ, ನಾನು
ಈ ಕಲ್ಲುಗಳ ಮೇಲೆ ಬರೆಯುವೆನು. [2]ನಾಳೆ ಮುಂಜಾನೆ
ಸೀನಾಯಿ ಬೆಟ್ಟಕ್ಕೇರಿ ಬಾ. ಬೆಟ್ಟದ ಮೇಲೆ ನನ್ನೆದುರಿನಲ್ಲಿ
ನಿಂತುಕೋ. [3]ನಿನ್ನೊಂದಿಗೆ ಯಾರೂ ಬರಕೂಡದು.
ಬೆಟ್ಟದ ಯಾವ ಸ್ಥಳದಲ್ಲಿಯೂ ಯಾರೂ ಕಾಣಿಸ
ಬಾರದು. ನಿಮ್ಮ ಪಶುಗಳಾಗಲೀ ಕುರಿಮಂದೆಗಳಾಗಲೀ
ಬೆಟ್ಟದ ಬುಡದಲ್ಲಿ ಹುಲ್ಲು ಮೇಯಕೂಡದು'' ಎಂದು
ಹೇಳಿದನು.

[4]ಆದ್ದರಿಂದ ಮೋಶೆ ಮೊದಲಿನ ಎರಡು ಕಲ್ಲುಗಳಂತೆ
ಇನ್ನೆರಡು ಕಲ್ಲಿನ ಹಲಿಗೆಗಳನ್ನು ಮಾಡಿದನು. ಬಳಿಕ
ಮರುದಿನ ಮುಂಜಾನೆ ಬೇಗನೆ ಸೀನಾಯಿ ಬೆಟ್ಟವನ್ನೇರಿ
ದನು. ಯೆಹೋವನು ಆಜ್ಞಾಪಿಸಿದಂತೆ ಮೋಶೆಯು ಪ್ರತಿ
ಯೊಂದನ್ನು ಮಾಡಿದನು. ಮೋಶೆಯು ಎರಡು ಕಲ್ಲಿನ
ಹಲಿಗೆಗಳನ್ನು ಹಿಡಿದುಕೊಂಡು ಹೋದನು.
[5]ಮೋಶೆಯು ಬೆಟ್ಟವನ್ನೇರಿ ಹೋದನಂತರ ಯೆಹೋ
ವನು ಮೇಘದಲ್ಲಿ ಅವನ ಬಳಿಗೆ ಇಳಿದು ಬಂದನು.
ಯೆಹೋವನು ಮೋಶೆಯೊಡನೆ ಅಲ್ಲಿ ನಿಂತನು ಮತ್ತು
ಮೋಶೆಯು ಯೆಹೋವನ ಹೆಸರನ್ನು ಕರೆದನು.*

[6]ಯೆಹೋವನು ಮೋಶೆಯ ಮುಂದೆ ಹಾದು
ಹೋಗುತ್ತಾ, ''ದೇವರಾದ ಯೆಹೋವನು ದಯೆಯೂ
ಕನಿಕರವೂ ಉಳ್ಳ ದೇವರಾಗಿದ್ದಾನೆ. ಯೆಹೋವನು
ಕೋಪಗೊಳ್ಳುವುದರಲ್ಲಿ ನಿಧಾನವಾಗಿದ್ದಾನೆ. ಯೆಹೋ
ವನು ಮಹಾಪ್ರೀತಿಸ್ವರೂಪನಾಗಿದ್ದಾನೆ. ಯೆಹೋವನು
ಭರವಸೆಗೆ ಯೋಗ್ಯನಾಗಿದ್ದಾನೆ. [7]ಯೆಹೋವನು ಸಾವಿ
ರಾರು ಸಂತತಿಗಳವರೆಗೆ ತನ್ನ ದಯೆ ತೋರಿಸುತ್ತಾನೆ.
ಯೆಹೋವನು ಜನರು ಮಾಡುವ ಪಾಪಗಳನ್ನು ಕ್ಷಮಿಸು
ತ್ತಾನೆ. ಆದರೆ ಅಪರಾಧಿಗಳನ್ನು ಶಿಕ್ಷಿಸು ವುದಕ್ಕೆ ಆತನು
ಮರೆಯುವುದಿಲ್ಲ. ಯೆಹೋವನು ಅಪರಾಧಿಗಳನ್ನು
ಶಿಕ್ಷಿಸುವನು ಮತ್ತು ಅವರ ಅಪರಾಧದ ಫಲವು ಅವರ
ಮಕ್ಕಳ ಮೇಲೂ ಮೊಮ್ಮಕ್ಕಳ ಮೇಲೂ ಮತ್ತು ಮರಿ
ಮೊಮ್ಮಕ್ಕಳ ಮೇಲೂ ಬರುವಂತೆ ಮಾಡುವನು'' ಎಂದು
ಹೇಳಿದನು.

[8]ಕೂಡಲೇ ಮೋಶೆಯು ನೆಲದ ಮೇಲೆ ಅಡ್ಡಬಿದ್ದು
ಯೆಹೋವನನ್ನು ಆರಾಧಿಸಿದನು. [9]ಮೋಶೆಯು,
''ಯೆಹೋವನೇ, ನಿನ್ನ ದಯೆ ನನಗೆ ದೊರಕುವುದಾದರೆ,
ದಯವಿಟ್ಟ ನಮ್ಮೊಂದಿಗೆ ಬಾ. ಇವರು ಅವಿಧೇಯರಾದ
ಜನರೆಂದು ನಾನು ಬಲ್ಲೆನು. ಆದರೆ ನಮ್ಮ ಪಾಪಗಳನ್ನು
ಕ್ಷಮಿಸು. ನಮ್ಮನ್ನು ನಿನ್ನ ಜನರನ್ನಾಗಿ ಸ್ವೀಕರಿಸು'' ಎಂದು
ಬೇಡಿಕೊಂಡನು.

[10]ಆಗ ಯೆಹೋವನು, ''ನಾನು ನಿಮ್ಮೊಂದಿಗೆ ಈ
ಒಡಂಬಡಿಕೆಯನ್ನು ಮಾಡುತ್ತಿದ್ದೇನೆ. ಭೂಲೋಕದಲ್ಲಿ
ಎಲ್ಲಿಯೇ ಆಗಲಿ ಯಾವ ಜನಾಂಗದಲ್ಲಿಯೇ ಆಗಲಿ
ಹಿಂದೆಂದೂ ನಡೆಯದಂತ ಮಹತ್ಕಾರ್ಯಗಳನ್ನು
ಮಾಡುವೆನು. ಎಲ್ಲಾ ಜನರು ಮತ್ತು ನಿನ್ನೊಂದಿಗಿರುವ
ಜನರು ಇವುಗಳನ್ನು ನೋಡಿ ಯೆಹೋವನಾದ ನಾನೇ
ಮಹಾಮಹಿಮಾಸ್ವರೂಪನೆಂದು ತಿಳಿದುಕೊಳ್ಳುವರು.
[11]ನಾನು ಈ ದಿನ ಕೊಡುವ ಆಜ್ಞೆಗಳಿಗೆ ವಿಧೇಯರಾಗಿರಿ,
ನಿಮ್ಮ ವೈರಿಗಳಾದ ಅಮೋರಿಯರನ್ನು, ಕಾನಾನ್ಯರನ್ನು,
ಹಿತ್ತಿಯರನ್ನು, ಪೆರಿಜೀಯರನ್ನು, ಹಿವ್ವಿಯರನ್ನು ಮತ್ತು
ಯೆಬೂಸಿಯರನ್ನು ನಾನು ಹೊರಗಟ್ಟುವೆನು. [12]ಎಚ್ಚರಿಕೆ
ಯಾಗಿರಿ! ನೀವು ಹೋಗುತ್ತಿರುವ ದೇಶದಲ್ಲಿರುವ

---

**ಯೆಹೋವನು ... ಕರೆದನು** ಮೋಶೆ ಯೆಹೋವನನ್ನು ಆರಾಧಿಸಿದನು
ಎಂದಾಗಲೀ ಯೆಹೋವನು ತನ್ನ ಹೆಸರನ್ನು ಮೋಶೆಗೆ ಪ್ರಕಟಿಸಿ
ಕೊಂಡನು ಎಂದಾಗಲೀ ಇದು ಅರ್ಥಕೊಡಬಲ್ಲದು.

ಜನರೊಂದಿಗೆ ಯಾವ ಒಪ್ಪಂದವನ್ನೂ ಮಾಡಿಕೊಳ್ಳ
ಬೇಡಿರಿ. ನೀವು ಆ ಜನರೊಂದಿಗೆ ಒಪ್ಪಂದ ಮಾಡಿ
ಕೊಂಡರೆ, ಅದು ನಿಮಗೆ ಕೇಡನ್ನು ಬರಮಾಡುವುದು.
13ಅವರ ವೇದಿಕೆಗಳನ್ನು ನಾಶಮಾಡಿರಿ. ಅವರು ಪೂಜಿ
ಸುವ ಕಲುಗಳನ್ನು ಒಡೆದುಹಾಕಿರಿ. ಅವರ ವಿಗ್ರಹಗಳನ್ನು
ಕಡಿದುಹಾಕಿರಿ. 14ಬೇರೆ ಯಾವ ದೇವರನ್ನು ಪೂಜಿಸ
ಬೇಡಿರಿ. ನಾನೇ ಯೆಹೋವನು. 'ಸ್ವಗೌರವವನ್ನು
ಕಾಪಾಡಿಕೊಳ್ಳುವವನು' ಎಂಬುದೇ ನನ್ನ ಹೆಸರು.
15''ಎಚ್ಚರಿಕೆಯಾಗಿರಿ, ಆ ದೇಶದಲ್ಲಿ ವಾಸಿಸುವ ಜನ
ರೊಂದಿಗೆ ಯಾವ ಒಪ್ಪಂದವನ್ನೂ ಮಾಡಿಕೊಳ್ಳಬೇಡಿರಿ.
ಇಲ್ಲವಾದರೆ ಅವರು ತಮ್ಮ ದೇವರುಗಳನ್ನು ಪೂಜಿಸು
ವಾಗ ನೀವು ಅವರೊಂದಿಗೆ ಸೇರಿಕೊಳ್ಳುವಿರಿ. ಅವ
ರೊಂದಿಗೆ ಸೇರಿಕೊಳ್ಳುವಂತೆ ನಿಮ್ಮನ್ನು ಆಹ್ವಾನಿಸುವರು;
ಅವರ ಯಜ್ಞಾರ್ಪಣೆಗಳನ್ನು ತಿನ್ನುವಿರಿ. 16ನೀವು ಅವರ
ಪುತ್ರಿಯರಲ್ಲಿ ಕೆಲವರನ್ನು ನಿಮ್ಮ ಪುತ್ರರಿಗೆ ಹೆಂಡತಿಯ
ರಾಗುವುದಕ್ಕೆ ಆರಿಸಿಕೊಳ್ಳುವಿರಿ, ಅವರ ಪುತ್ರಿಯರು
ಸುಳ್ಳುದೇವರುಗಳ ಸೇವೆ ಮಾಡುತ್ತಾರೆ. ನಿಮ್ಮ ಪುತ್ರ
ರನ್ನೂ ಅವರು ಅದೇ ಸೇವೆಗೆ ನಡೆಸುತ್ತಾರೆ.
17''ವಿಗ್ರಹಗಳನ್ನು ಮಾಡಿಕೊಳ್ಳಬೇಡಿರಿ.
18''ಹುಳಿಯಿಲ್ಲದ ರೊಟ್ಟಿಯ ಹಬ್ಬವನ್ನು ಆಚರಿಸಿರಿ.
ನಾನು ನಿಮಗೆ ಮೊದಲು ಆಜ್ಞಾಪಿಸಿದಂತೆ ಹುಳಿಯಿಲ್ಲದ
ರೊಟ್ಟಿಯನ್ನು ಏಳು ದಿನಗಳವರೆಗೆ ತಿನ್ನಿರಿ. ನಾನು ಆರಿಸಿ
ಕೊಂಡ ಅಬೀಬ್ (ಮಾರ್ಚ್-ಎಪ್ರಿಲ್) ಮಾಸದಲ್ಲಿ
ಇದನ್ನು ಮಾಡಿರಿ. ಯಾಕಂದರೆ ಆ ತಿಂಗಳಲ್ಲಿ ನೀವು
ಈಜಿಪ್ಟಿನಿಂದ ಬಿಡುಗಡೆ ಹೊಂದಿದಿರಿ.
19''ಸ್ತ್ರೀಯಲ್ಲಿ ಹುಟ್ಟಿದ ಮೊದಲಿನ ಮಗು ಯಾವಾ
ಗಲೂ ನನಗೆ ಸೇರಿದ್ದು. ನಿಮ್ಮ ದನಕುರಿಗಳಲ್ಲಿ ಹುಟ್ಟಿದ
ಮೊದಲ ಮರಿಗಳು ನನಗೆ ಸೇರಿದವುಗಳಾಗಿವೆ. 20ಚೊಚ್ಚ
ಲಾಗಿ ಹುಟ್ಟಿದ ಕತ್ತೆಯನ್ನು ನೀವು ಇಟ್ಟುಕೊಳ್ಳಲು
ಬಯಸಿದರೆ, ಆಗ ನೀವು ಕುರಿಮರಿಯನ್ನು ಕೊಟ್ಟು
ಅದನ್ನು ಕೊಂಡುಕೊಳ್ಳಬಹುದು. ಆದರೆ ನೀವು ಅದನ್ನು
ಕೊಂಡುಕೊಳ್ಳದಿದ್ದರೆ, ಅದರ ಕುತ್ತಿಗೆಯನ್ನು ಮುರಿಯ
ಬೇಕು. ನೀವು ನಿಮ್ಮ ಎಲ್ಲಾ ಚೊಚ್ಚಲು ಗಂಡುಮಕ್ಕಳನ್ನು
ನನ್ನಿಂದ ಕೊಂಡುಕೊಳ್ಳಬೇಕು. ಯಾವ ವ್ಯಕ್ತಿಯೂ
ಕಾಣಿಕೆಯಿಲ್ಲದೆ, ನನ್ನ ಸನ್ನಿಧಿಗೆ ಬರಕೂಡದು.
21''ನೀವು ವಾರದಲ್ಲಿ ಆರುದಿನ ಕೆಲಸ ಮಾಡುವಿರಿ.
ಆದರೆ ಏಳನೆಯ ದಿನದಲ್ಲಿ ನೀವು ವಿಶ್ರಮಿಸಿಕೊಳ್ಳಬೇಕು.
ನೀವು ಬಿತ್ತುವ ಮತ್ತು ಕೊಯ್ಯುವ ಸಮಯದಲ್ಲಿಯೂ
ವಿಶ್ರಮಿಸಿಕೊಳ್ಳಬೇಕು. 22''ವಾರಗಳ ಹಬ್ಬವನ್ನು*
ಆಚರಿಸಿರಿ. ಈ ಹಬ್ಬಕ್ಕಾಗಿ ಗೋಧಿಬೆಳೆಯ ಪ್ರಥಮ
ಕಾಳನ್ನು ಉಪಯೋಗಿಸಿರಿ ಮತ್ತು ವರ್ಷಾಂತ್ಯದಲ್ಲಿ*
ಸುಗ್ಗಿಹಬ್ಬವನ್ನು* ಆಚರಿಸಿರಿ.
23''ವರ್ಷದಲ್ಲಿ ಮೂರುಸಲ ನಿಮ್ಮ ಗಂಡಸರೆಲ್ಲರೂ
ಇಸ್ರೇಲರ ದೇವರೂ, ಯೆಹೋವನೂ, ಒಡೆಯನೂ
ಆಗಿರುವಾತನ ಸನ್ನಿಧಿಯಲ್ಲಿ ಸೇರಬೇಕು.
24''ನೀವು ದೇಶದೊಳಕ್ಕೆ ಹೋದಾಗ, ನಾನು ನಿಮ್ಮ
ವೈರಿಗಳನ್ನು ಆ ದೇಶದಿಂದ ಹೊರಗಟ್ಟುವೆನು. ನಾನು
ನಿಮ್ಮ ಮೇರೆಗಳನ್ನು ವಿಸ್ತರಿಸುವೆನು. ನಿಮಗೆ ಹೆಚ್ಚೆಚ್ಚಾಗಿ
ಭೂಮಿ ದೊರೆಯುವುದು. ಪ್ರತಿ ವರ್ಷ ಮೂರುಸಲ
ನೀವು ನಿಮ್ಮ ದೇವರಾದ ಯೆಹೋವನ ಸನ್ನಿಧಿಗೆ ಹೋಗು
ವಿರಿ. ಆ ಸಮಯದಲ್ಲಿ ಯಾರೂ ನಿಮ್ಮಿಂದ ಭೂಮಿ
ಯನ್ನು ಅಪಹರಿಸಲು ಪ್ರಯತ್ನಿಸುವುದಿಲ್ಲ.
25''ನೀವು ಯಜ್ಞಮಾಡುವಾಗ ಆ ಯಜ್ಞಪಶುವಿನ ರಕ್ತ
ದೊಡನೆ ಹುಳಿಹಿಟ್ಟನ್ನು ಸಮರ್ಪಿಸಬಾರದು;
''ಪಸ್ಕ ಭೋಜನದ ಮಾಂಸದಲ್ಲಿ ಏನನ್ನೂ ಮರು
ದಿನದ ಮುಂಜಾನೆಯವರೆಗೆ ಉಳಿಸಬಾರದು.
26''ನೀವು ಕೊಯ್ಯುವ ಪ್ರಥಮವಾದ ಬೆಳೆಗಳನ್ನು
ಯೆಹೋವನಿಗೆ ಕೊಡಿರಿ. ಅವುಗಳನ್ನು ನಿಮ್ಮ ದೇವರಾದ
ಯೆಹೋವನ ಆಲಯಕ್ಕೆ* ತನ್ನಿರಿ.
''ಹೋತಮರಿಯನ್ನು ಅದರ ತಾಯಿಯ ಹಾಲಿನಲ್ಲಿ
ಎಂದಿಗೂ ಬೇಯಿಸಬಾರದು.''
27ಬಳಿಕ ಯೆಹೋವನು ಮೋಶೆಗೆ, ''ನಾನು ನಿನಗೆ
ಹೇಳಿದ ಸಂಗತಿಗಳನ್ನೆಲ್ಲಾ ಬರೆ. ಆ ಸಂಗತಿಗಳು ನಾನು
ನಿನ್ನೊಂದಿಗೆ ಮತ್ತು ಇಸ್ರೇಲರೊಂದಿಗೆ ಮಾಡಿದ ಒಡಂ
ಬಡಿಕೆಯಾಗಿದೆ'' ಎಂದು ಹೇಳಿದನು.
28ಮೋಶೆಯು ಅಲ್ಲಿ ಯೆಹೋವನೊಂದಿಗೆ ಹಗಲಿ
ರುಳು ನಲವತ್ತು ದಿನಗಳಿದ್ದನು. ಆ ದಿನಗಳಲ್ಲಿ ಅವನು
ಆಹಾರವನ್ನಾಗಲೀ ನೀರನ್ನಾಗಲೀ ಸೇವಿಸಲಿಲ್ಲ.
ಮೋಶೆಯು ಒಡಂಬಡಿಕೆಯ ವಾಕ್ಯಗಳನ್ನು ಅಂದರೆ
ದಶಾಜ್ಞೆಗಳನ್ನು ಎರಡು ಕಲ್ಲಿನ ಹಲಿಗೆಗಳ ಮೇಲೆ
ಬರೆದನು.

### ಮೋಶೆಯ ಹೊಳೆಯುವ ಮುಖ

29ತರುವಾಯ ಮೋಶೆಯು ಸೀನಾಯಿ ಬೆಟ್ಟದಿಂದ
ಇಳಿದುಬಂದನು. ಒಡಂಬಡಿಕೆಯ ವಾಕ್ಯಗಳು ಬರೆಯಲ್ಪ
ಟ್ಟಿದ್ದ ಎರಡು ಕಲ್ಲಿನ ಹಲಿಗೆಗಳನ್ನು ಅವನು ಹಿಡಿದು
ಕೊಂಡಿದ್ದನು. ಯೆಹೋವನು ಅವನೊಡನೆ ಮಾತಾಡಿದ್ದ
ರಿಂದ ಅವನ ಮುಖವು ಹೊಳೆಯುತ್ತಿತ್ತು. ಆದರೆ
ಮೋಶೆಗೆ ಇದು ತಿಳಿದಿರಲಿಲ್ಲ. 30ಮೋಶೆಯ ಮುಖವು

---

**ವಾರಗಳ ಹಬ್ಬ** ''ಪಂಚಾಶತ್ತಮ'' ಅಥವಾ ''ಷಾಹುಹೋತ್'' ಎಂಬುದಾಗಿಯೂ ಕರೆಯಲ್ಪಟ್ಟಿದೆ.

**ವರ್ಷಾಂತ್ಯ** ಅಂದರೆ ಚಳಿಗಾಲದಲ್ಲಿ.

**ಸುಗ್ಗಿಹಬ್ಬ** ಇದನ್ನು ''ಸುಕ್ಕೋತ್'' ಎಂದೂ ಕರೆಯುತ್ತಾರೆ.

**ಆಲಯ** ದೇವದರ್ಶನಗುಡಾರ.

ಶುಭ್ರವಾಗಿ ಹೊಳೆಯುತ್ತಿರುವುದನ್ನು ಆರೋನನೂ
ಇಸ್ರೇಲರೆಲ್ಲರೂ ನೋಡಿದರು. ಆದ್ದರಿಂದ ಅವನ ಬಳಿಗೆ
ಹೋಗಲು ಅವರು ಭಯಪಟ್ಟರು. 31ಆದರೆ ಮೋಶೆ
ಅವರನ್ನು ಕರೆದನು. ಆದ್ದರಿಂದ ಆರೋನನೂ ಜನ
ನಾಯಕರೆಲ್ಲರೂ ಮೋಶೆಯ ಬಳಿಗೆ ಹೋದರು.
ಮೋಶೆಯು ಅವರೊಡನೆ ಮಾತಾಡಿದನು. 32ಅದಾದ
ನಂತರ, ಇಸ್ರೇಲರೆಲ್ಲರೂ ಮೋಶೆಯ ಬಳಿಗೆ ಬಂದರು.
ಯೆಹೋವನು ಸೀನಾಯಿ ಬೆಟ್ಟದಲ್ಲಿ ತನಗೆ ಕೊಟ್ಟ
ಅಪ್ಪಣೆಗಳನ್ನು ಮೋಶೆಯು ಅವರಿಗೆ ಕೊಟ್ಟನು.
33ಮೋಶೆಯು ಜನರೊಡನೆ ಮಾತಾಡಿ ಮುಗಿಸಿದಾಗ,
ತನ್ನ ಮುಖದ ಮೇಲೆ ಮುಸುಕನ್ನು ಹಾಕಿಕೊಂಡನು.
34ಮೋಶೆಯು ಯೆಹೋವನೊಡನೆ ಮಾತಾಡಲು ಆತನ
ಸನ್ನಿಧಿಗೆ ಹೋದಾಗಲೆಲ್ಲಾ ಮೋಶೆಯು ಮುಸುಕನ್ನು ತೆಗೆ
ದಿಡುತ್ತಿದ್ದನು. ಬಳಿಕ ಮೋಶೆ ಹೊರಗೆ ಬಂದು
ಯೆಹೋವನು ಆಜ್ಞಾಪಿಸಿದ ಸಂಗತಿಗಳನ್ನು ಇಸ್ರೇಲರಿಗೆ
ತಿಳಿಸುತ್ತಿದ್ದನು. 35ಮೋಶೆಯ ಮುಖವು ಶುಭ್ರವಾಗಿ
ಹೊಳೆಯುತ್ತಿದ್ದುದನ್ನು ಜನರು ನೋಡಿದರು. ಆದ್ದರಿಂದ
ಮೋಶೆ ತನ್ನ ಮುಖಕ್ಕೆ ಮುಸುಕುಹಾಕಿಕೊಳ್ಳುತ್ತಿದ್ದನು.
ಮೋಶೆಯು ಮುಂದಿನ ಸಾರಿ ಯೆಹೋವನೊಡನೆ
ಮಾತಾಡಲು ಹೋಗುವವರೆಗೆ ಮುಸುಕು ಹಾಕಿ
ಕೊಂಡಿರುವನು.

## ಸಬ್ಬತ್ತಿನ ಬಗ್ಗೆ ನಿಯಮಗಳು

35 ಮೋಶೆಯು ಇಸ್ರೇಲರನ್ನು ಒಟ್ಟಾಗಿ ಸೇರಿ
ಸಿದನು. ಮೋಶೆ ಅವರಿಗೆ, ‘‘ನೀವು ಅನುಸರಿಸ
ಬೇಕೆಂದು ಯೆಹೋವನು ನಿಮಗೆ ಆಜ್ಞಾಪಿಸಿದ ಸಂಗತಿ
ಗಳನ್ನು ನಾನು ಹೇಳುವೆನು.
2‘‘ಕೆಲಸ ಮಾಡುವುದಕ್ಕೆ ಆರು ದಿನಗಳಿವೆ. ಆದರೆ
ಏಳನೆಯ ದಿನವು ನಿಮಗೆ ಬಹು ವಿಶೇಷವಾದ ವಿಶ್ರಾಂತಿ
ದಿನವಾಗಿರುವುದು. ಆ ವಿಶೇಷ ದಿನದಲ್ಲಿ ವಿಶ್ರಮಿಸು
ವುದರ ಮೂಲಕ ನೀವು ಯೆಹೋವನನ್ನು ಸನ್ಮಾನಿಸು
ವಿರಿ. ಏಳನೆಯ ದಿನದಲ್ಲಿ ಕೆಲಸಮಾಡುವ ವ್ಯಕ್ತಿಯು
ಸಂಹರಿಸಲ್ಪಡಬೇಕು. 3ನೀವು ವಾಸಿಸುವ ಯಾವ ಸ್ಥಳ
ದಲ್ಲಿಯೂ ಸಬ್ಬತ್‌ದಿನದಂದು ಬೆಂಕಿಯನ್ನು ಹೊತ್ತಿಸ
ಬಾರದು’’ ಎಂದು ಹೇಳಿದನು.

## ಪವಿತ್ರಗುಡಾರಕ್ಕೆ ವಸ್ತುಗಳು

4ಮೋಶೆಯು ಇಸ್ರೇಲರಿಗೆ, ‘‘ಯೆಹೋವನು ಆಜ್ಞಾಪಿ
ಸಿದ್ದು ಇದುವೇ. 5ಯೆಹೋವನಿಗಾಗಿ ಕಾಣಿಕೆಗಳನ್ನು
ಕೂಡಿಸಿರಿ. ನಿಮ್ಮಲ್ಲಿ ಪ್ರತಿಯೊಬ್ಬನು ತಾನು ಕೊಡುವಂಥ
ದ್ದನ್ನು ತನ್ನ ಹೃದಯದಲ್ಲಿ ತೀರ್ಮಾನಿಸಿಕೊಳ್ಳಬೇಕು.
ಬಳಿಕ ಆ ಕಾಣಿಕೆಯನ್ನು ಯೆಹೋವನ ಸನ್ನಿಧಿಗೆ ತರ
ಬೇಕು. ಚಿನ್ನ ಬೆಳ್ಳಿ, ತಾಮ್ರ, 6ನೀಲಿ, ನೇರಳೆ, ಕೆಂಪುದಾರ,
ಮತ್ತು ಶ್ರೇಷ್ಠನಾರುಬಟ್ಟೆ, ಆಡಿನ ಕೂದಲು, 7ಕೆಂಪು
ಬಣ್ಣದ ಕುರಿದೊಗಲು, ಕಡಲುಹಂದಿಯ ತೊಗಲು,
ಜಾಲೀಮರ, 8ದೀಪಗಳಿಗೆ ಬೇಕಾದ ಎಣ್ಣೆ, ಅಭಿಷೇಕ
ತೈಲ ಮತ್ತು ಪರಿಮಳಧೂಪವನ್ನು ತಯಾರಿಸಲು ಬೇಕಾದ
ಸುಗಂಧದ್ರವ್ಯ ಇವುಗಳನ್ನು ತನ್ನಿರಿ. 9ಏಫೋದಿನಲ್ಲಿ
ಮತ್ತು ದೈವನಿರ್ಣಯದ ಪದಕದಲ್ಲಿ ಹಾಕಬೇಕಾಗಿರುವ
ಗೋಮೇಧಿಕ ರತ್ನಗಳು ಮತ್ತು ಇತರ ರತ್ನಗಳನ್ನು ತನ್ನಿರಿ.
10‘‘ಯೆಹೋವನು ಆಜ್ಞಾಪಿಸಿದ ವಸ್ತುಗಳನ್ನು ನಿಮ್ಮಲ್ಲಿ
ನಿಪುಣರಾದ ಕೆಲಸಗಾರರೆಲ್ಲರೂ ಮಾಡಬೇಕು. ಅವು
ಯಾವುವೆಂದರೆ, 11ಪವಿತ್ರಗುಡಾರ, ಅದರ ಹೊರಗಿನ
ಡೇರೆ, ಅದರ ಮೇಲ್ಹೊದಿಕೆಗಳು, ಕೊಂಡಿಗಳು, ಚೌಕ
ಟ್ಟುಗಳು, ಅಗುಳಿಗಳು, ಕಂಬಗಳು, ಗದ್ದಿಗೇಕಲ್ಲುಗಳು,
12ಪವಿತ್ರಪೆಟ್ಟಿಗೆ ಮತ್ತು ಅದರ ಕೋಲುಗಳು, ಕೃಪಾಸನ
ಮತ್ತು ಪೆಟ್ಟಿಗೆ ಇರುವ ಸ್ಥಳವನ್ನು ಮುಚ್ಚುವ ಪರದೆ,
13ಮೇಜು ಮತ್ತು ಅದರ ಕೋಲುಗಳು, ಮೇಜಿನ ಮೇಲಿ
ರುವ ಎಲ್ಲಾ ಉಪಕರಣಗಳು, ಮೇಜಿನ ಮೇಲಿರುವ
ನೈವೇದ್ಯ ರೊಟ್ಟಿ, 14ದೀಪಸ್ತಂಭ ಮತ್ತು ಅದರ ಉಪ
ಕರಣಗಳು, ದೀಪಗಳು, ದೀಪಕ್ಕೆ ಬೇಕಾದ ಎಣ್ಣೆ,
15ಧೂಪವೇದಿ ಮತ್ತು ಅದರ ಕೋಲುಗಳು, ಅಭಿಷೇಕ
ತೈಲ, ಪರಿಮಳಧೂಪ, ಪವಿತ್ರ ಗುಡಾರದ ಬಾಗಿಲಿನ
ಪರದೆ, 16ಸರ್ವಾಂಗಹೋಮ ಮಾಡಲು ಯಜ್ಞವೇದಿಕೆ
ಮತ್ತು ಅದರ ತಾಮ್ರದ ಜಾಳಿಗೆ, ಕೋಲುಗಳು, ಯಜ್ಞ
ವೇದಿಕೆಗೆ ಬೇಕಾಗುವ ಎಲ್ಲಾ ಉಪಕರಣಗಳು, ಗಂಗಾಳ
ಮತ್ತು ಅದರ ಪೀಠ 17ಅಂಗಳದ ಸುತ್ತಲಿನ ಪರದೆಗಳು,
ಕಂಬಗಳು ಗದ್ದಿಗೇಕಲ್ಲುಗಳು, ಅಂಗಳದ ಬಾಗಿಲಿನ
ಪರದೆ, 18ಗುಡಾರದ ಗೂಟಗಳು, ಅಂಗಳದ ಗೂಟಗಳು
ಮತ್ತು ಹಗ್ಗಗಳು, 19ಮತ್ತು ಪವಿತ್ರ ಸ್ಥಳದಲ್ಲಿ ಯಾಜಕರು
ಧರಿಸತಕ್ಕ ವಿಶೇಷವಾದ ಹೆಣೆದ ಬಟ್ಟೆಗಳು. ಈ ಬಟ್ಟೆ
ಗಳನ್ನು ಯಾಜಕನಾದ ಆರೋನನು ಮತ್ತು ಅವನ
ಪುತ್ರರು ಯಾಜಕಸೇವೆ ಮಾಡುವಾಗ ಧರಿಸಿ
ಕೊಳ್ಳುವರು’’ ಎಂದು ಹೇಳಿದನು.

## ಜನರಿಂದ ಮಹಾಕಾಣಿಕೆ

20ಬಳಿಕ ಇಸ್ರೇಲರೆಲ್ಲರೂ ಮೋಶೆಯ ಬಳಿಯಿಂದ
ಹೊರಟುಹೋದರು. 21ಕಾಣಿಕೆ ಕೊಡುವುದಕ್ಕೆ
ಯಾರ್‍ಯಾರು ಬಯಸಿದರೋ ಅವರೆಲ್ಲರೂ ಬಂದು
ಯೆಹೋವನಿಗೆ ಕಾಣಿಕೆಯನ್ನು ಅರ್ಪಿಸಿದರು. ಈ ಕಾಣಿಕೆ
ಗಳು ದೇವದರ್ಶನಗುಡಾರ, ಅದರ ಎಲ್ಲಾ ವಸ್ತುಗಳು
ಮತ್ತು ವಿಶೇಷ ಬಟ್ಟೆಗಳನ್ನು ಮಾಡಲು ಉಪಯೋಗಿಸ
ಲ್ಪಟ್ಟವು. 22ಕಾಣಿಕೆ ಕೊಡುವುದಕ್ಕೆ ಬಯಸಿದ ಎಲ್ಲಾ
ಗಂಡಸರು, ಹೆಂಗಸರು ಎಲ್ಲಾ ವಿಧದ ಚಿನ್ನದ

ಆಭರಣಗಳನ್ನು ತಂದರು. ಅವರ ಕಡಗ, ಮುರುವು
(ಓಲೆ) ಉಂಗುರ ಮತ್ತು ಇತರ ಚಿನ್ನದ ಆಭರಣಗಳನ್ನು
ತಂದರು. ಅವರೆಲ್ಲರು ತಮ್ಮ ಎಲ್ಲಾ ಕೊಡುಗೆಗಳನ್ನು
ಯೆಹೋವನಿಗೆ ಕೊಟ್ಟರು. ಇದು ಯೆಹೋವನಿಗೆ ಕೊಟ್ಟ
ವಿಶೇಷವಾದ ಕಾಣಿಕೆಯಾಗಿತ್ತು.

23ಪ್ರತಿಯೊಬ್ಬನು ತನ್ನಲ್ಲಿದ್ದ ಶ್ರೇಷ್ಠ ನಾರುಬಟ್ಟೆ
ಯನ್ನು, ನೀಲಿ, ನೇರಳೆ ಮತ್ತು ಕೆಂಪು ದಾರಗಳನ್ನು
ಯೆಹೋವನಿಗಾಗಿ ತಂದನು. ಯಾರಲ್ಲಿ ಕೆಂಪುಬಣ್ಣದ
ಕುರಿದೊಗಲಾಗಲೀ ನೀರೆಮ್ಮೆ ತೊಗಲಾಗಲೀ ಇದ್ದವೋ
ಅವರು ಅವುಗಳನ್ನು ಯೆಹೋವನಿಗಾಗಿ ತಂದು
ಕೊಟ್ಟರು. 24ಬೆಳ್ಳಿಯನ್ನಾಗಲೀ ತಾಮ್ರವನ್ನಾಗಲೀ
ಕೊಡಲು ಬಯಸಿದವರು ಅದನ್ನು ಕೆಲಸಕ್ಕೋಸ್ಕರ
ಯೆಹೋವನಿಗೆ ಕಾಣಿಕೆಯಾಗಿ ತಂದರು. ಜಾಲೀಮರ
ವನ್ನು ಹೊಂದಿದ್ದವರು ಅದನ್ನು ಯೆಹೋವನಿಗೆ ಕಾಣಿಕೆ
ಯಾಗಿ ಕೊಟ್ಟರು. 25ನಿಪುಣರಾದ ಸ್ತ್ರೀಯರು ಶ್ರೇಷ್ಠ
ನಾರುಬಟ್ಟೆಯನ್ನು, ನೀಲಿ, ನೇರಳೆ, ಕೆಂಪು ದಾರಗಳನ್ನು
ಮಾಡಿದರು. 26ನಿಪುಣರಾಗಿದ್ದ ಇತರ ಸ್ತ್ರೀಯರು ಆಡು
ಕೂದಲಿನಿಂದ ಬಟ್ಟೆಯನ್ನು ತಯಾರಿಸಿದರು.

27ನಾಯಕರು ಗೋಮೇಧಿಕರತ್ನಗಳನ್ನು ಮತ್ತು ಇತರ
ರತ್ನಗಳನ್ನು ತಂದುಕೊಟ್ಟರು. ಅವುಗಳನ್ನು ಯಾಜಕನ
ಏಫೋದಿಗೂ ಮತ್ತು ದೈವನಿರ್ಣಯಪದಕಕ್ಕೂ ಉಪ
ಯೋಗಿಸಲಾಯಿತು. 28ಜನರು ಸುಗಂಧದ್ರವ್ಯಗಳನ್ನೂ
ಆಲಿವ್ ಎಣ್ಣೆಯನ್ನೂ ತಂದುಕೊಟ್ಟರು. ಈ ವಸ್ತುಗಳು
ಪರಿಮಳಧೂಪ, ಅಭಿಷೇಕತೈಲ ಮತ್ತು ದೀಪಗಳಿಗೆ
ಬೇಕಾದ ಎಣ್ಣೆ ಇವುಗಳನ್ನು ಮಾಡಲು ಉಪಯೋಗಿ
ಸಲ್ಪಟ್ಟವು.

29ಸಹಾಯ ಮಾಡುವುದಕ್ಕೆ ಬಯಸಿದ ಇಸ್ರೇಲರೆ
ಲ್ಲರೂ ಯೆಹೋವನಿಗೆ ಕಾಣಿಕೆಗಳನ್ನು ತಂದುಕೊಟ್ಟರು.
ಈ ಕಾಣಿಕೆಗಳನ್ನು ಗಂಡಸರು ಮತ್ತು ಹೆಂಗಸರು ಕೊಡು
ವುದಕ್ಕೆ ಬಯಸಿದ್ದರಿಂದ ಉದಾರವಾಗಿ ಕೊಟ್ಟರು.
ಯೆಹೋವನು ಮೋಶೆಗೆ ಮತ್ತು ಜನರಿಗೆ ಆಜ್ಞಾಪಿಸಿದ
ಎಲ್ಲಾ ವಸ್ತುಗಳನ್ನು ಮಾಡುವುದಕ್ಕೆ ಈ ಕಾಣಿಕೆಗಳು ಉಪ
ಯೋಗಿಸಲ್ಪಟ್ಟವು.

**ಬೆಚಲೇಲ ಮತ್ತು ಒಹೊಲೀಯಾಬ**

30ಬಳಿಕ ಮೋಶೆಯು ಇಸ್ರೇಲರಿಗೆ ಹೀಗಂದನು:
‘‘ನೋಡಿರಿ, ಯೆಹೋವನು ಯೆಹೂದಕುಲದಿಂದ
ಊರಿಯನ ಮಗನಾದ ಬೆಚಲೇಲನನ್ನು ಆರಿಸಿಕೊಂಡಿ
ದ್ದಾನೆ. ಊರಿಯು ಹೂರನ ಮಗ. 31ಯೆಹೋವನು ಬೆಚ
ಲೇಲನನ್ನು ದೇವರಾತ್ಮಭರಿತನನ್ನಾಗಿ ಮಾಡಿ, ಎಲ್ಲಾ
ವಸ್ತುಗಳನ್ನು ಮಾಡುವುದಕ್ಕೆ ಬೇಕಾದ ವಿಶೇಷ ನಿಪುಣತೆ
ಯನ್ನೂ ಜ್ಞಾನವನ್ನೂ ಅನುಗ್ರಹಿಸಿದ್ದಾನೆ. 32ಅವನು
ಅಂದವಾಗಿ ನಕ್ಷೆಮಾಡಿ, ಚಿನ್ನ, ಬೆಳ್ಳಿ ಮತ್ತು ತಾಮ್ರಗಳಿಂದ
ವಸ್ತುಗಳನ್ನು ಮಾಡಬಲ್ಲನು. 33ಅವನು ಕಲ್ಲುಗಳನ್ನು,
ರತ್ನಗಳನ್ನು ಕತ್ತರಿಸಿ ಜೋಡಿಸಬಲ್ಲನು. ಬೆಚಲೇಲನು
ಮರಗೆಲಸವನ್ನು ಮಾಡಿ ಎಲ್ಲಾ ವಿಧದ ಕುಶಲ ವಸ್ತು
ಗಳನ್ನು ತಯಾರಿಸಬಲ್ಲನು. 34ಇತರರಿಗೆ ಕಲಿಸುವುದಕ್ಕೆ
ಬೇಕಾದ ವಿಶೇಷ ನಿಪುಣತೆಯನ್ನು ಯೆಹೋವನು ಬೆಚ
ಲೇಲನಿಗೂ ಒಹೊಲೀಯಾಬನಿಗೂ ಅನುಗ್ರಹಿಸಿದ್ದಾನೆ.
ಒಹೊಲೀಯಾಬನು ದಾನ್‌ಕುಲದ ಅಹೀಸಾಮಾಕನ
ಮಗನು. 35ಯೆಹೋವನು ಇವರಿಬ್ಬರಿಗೆ ಎಲ್ಲಾ ವಿಧದ
ಕೆಲಸಗಳನ್ನು ಮಾಡಲು ವಿಶೇಷ ನಿಪುಣತೆಯನ್ನು ಅನು
ಗ್ರಹಿಸಿದ್ದಾನೆ. ಅವರು ಮರಗೆಲಸವನ್ನೂ ಲೋಹದ ಕೆಲಸ
ವನ್ನೂ ಮಾಡಬಲ್ಲರು. ಅವರು ನೀಲಿ, ನೇರಳೆ ಕೆಂಪು
ದಾರಗಳಿಂದ ಮತ್ತು ಶ್ರೇಷ್ಠ ನಾರುಬಟ್ಟೆಯಿಂದ
ಅಲಂಕೃತವಾದ ಬಟ್ಟೆಗಳನ್ನು ನೇಯಿಗೆ ಮಾಡಬಲ್ಲರು;
ಅವರು ಉಣ್ಣೆ ಬಟ್ಟೆಗಳನ್ನು ನೇಯಲು ಶಕ್ತರಾಗಿದ್ದಾರೆ.

36 ‘‘ಆದ್ದರಿಂದ ಬೆಚಲೇಲನೂ ಒಹೊಲೀ
ಯಾಬನೂ ಮತ್ತು ಇತರ ಎಲ್ಲಾ ನಿಪುಣರೂ
ಯೆಹೋವನು ಆಜ್ಞಾಪಿಸಿದ ಕೆಲಸವನ್ನು ಮಾಡ ಬೇಕು.
ಈ ಪವಿತ್ರಸ್ಥಳವನ್ನು ಕಟ್ಟುವುದಕ್ಕಾಗಿ ಅವಶ್ಯವಿರುವ ಎಲ್ಲಾ
ಸೂಕ್ಷ್ಮವಾದ ಕೆಲಸವನ್ನು ಮಾಡುವುದಕ್ಕೆ ಯೆಹೋವನು
ಈ ಜನರಿಗೆ ಜ್ಞಾನವನ್ನೂ ತಿಳುವಳಿಕೆಯನ್ನೂ
ಅನುಗ್ರಹಿಸಿದ್ದಾನೆ.’’

2ಬಳಿಕ ಮೋಶೆಯು ಬೆಚಲೇಲನನ್ನು ಒಹೊಲೀ
ಯಾಬನನ್ನು ಮತ್ತು ಯೆಹೋವನಿಂದ ವಿಶೇಷ ಜ್ಞಾನ
ಹೊಂದಿದ ಇತರ ಎಲ್ಲಾ ನಿಪುಣರನ್ನು ಕರೆದನು.
ಕೆಲಸದಲ್ಲಿ ಸಹಾಯಮಾಡಲು ಇವರು ಬಯಸಿದ್ದರಿಂದ
ಬಂದರು. 3ಇಸ್ರೇಲರು ಕಾಣಿಕೆಗಳಾಗಿ ತಂದ
ವಸ್ತುಗಳನ್ನೆಲ್ಲಾ ಮೋಶೆಯು ಅವರಿಗೆ ಕೊಟ್ಟನು. ಅವರು
ದೇವರ ಪವಿತ್ರಸ್ಥಳವನ್ನು ಕಟ್ಟುವುದಕ್ಕಾಗಿ ಈ ವಸ್ತುಗಳನ್ನು
ಉಪಯೋಗಿಸಿದರು. ಪ್ರತಿ ಮುಂಜಾನೆ ಜನರು ಕಾಣಿಕೆ
ಗಳನ್ನು ತರುತ್ತಲೇ ಇದ್ದರು. 4ಆಗ ಆ ನಿಪುಣಲ್ಲಾ ತಾವು
ಮಾಡುತ್ತಿದ್ದ ಪವಿತ್ರ ಸ್ಥಳದ ಕೆಲಸವನ್ನು ಬಿಟ್ಟು
ಮೋಶೆಯೊಡನೆ ಮಾತಾಡಲು ಹೋದರು. ಅವರು,
5‘‘ಜನರು ಬಹಳ ಹೆಚ್ಚಾಗಿ ತಂದಿ ದ್ದಾರೆ! ಗುಡಾರದ
ಕೆಲಸವನ್ನು ಮುಗಿಸುವುದಕ್ಕೆ ನಮಗೆ
ಬೇಕಾಗಿರುವುದಕ್ಕಿಂತ ಹೆಚ್ಚಾಗಿ ನಮ್ಮಲ್ಲಿ ಇವೆ!’’ ಎಂದು
ಹೇಳಿದರು.

6ಆಗ ಮೋಶೆಯು, ‘‘ಪವಿತ್ರಸ್ಥಳದ ಕೆಲಸಕ್ಕಾಗಿ ಯಾವ
ಪುರುಷನಾಗಲೀ ಸ್ತ್ರೀಯಾಗಲೀ ಇನ್ನು ಮುಂದೆ ಯಾವು
ದನ್ನೂ ಕಾಣಿಕೆಯಾಗಿ ಸಿದ್ಧಮಾಡಬಾರದು’’ ಎಂಬ
ಸಂದೇಶವನ್ನು ಪಾಳೆಯದಲ್ಲೆಲ್ಲಾ ಕಳುಹಿಸಿದನು. ಆದ್ದ
ರಿಂದ ಜನರು ಹೆಚ್ಚಾಗಿ ಕೊಡುವುದನ್ನು ನಿಲ್ಲಿಸ

ಬೇಕಾಯಿತು. [7]ದೇವರ ಪವಿತ್ರಸ್ಥಳವನ್ನು ಕಟ್ಟುವ ಕೆಲಸ
ವನ್ನು ಮುಗಿಸುವುದಕ್ಕೆ ಬೇಕಾಗಿರುವುದಕ್ಕಿಂತಲೂ
ಹೆಚ್ಚಾಗಿ ಜನರು ತಂದಿದ್ದರು.

### ಪವಿತ್ರಗುಡಾರ

[8]ತರುವಾಯ ನಿಪುಣರು ಪವಿತ್ರ ಗುಡಾರವನ್ನು
ಮಾಡಲು ಪ್ರಾರಂಭಿಸಿದರು. ಅವರು ಶ್ರೇಷ್ಠ ನಾರು ಬಟ್ಟೆ
ಯಿಂದಲೂ ನೀಲಿ, ನೇರಳೆ, ಕೆಂಪು ದಾರಗಳಿಂದಲೂ
ಹತ್ತು ಪರದೆಗಳನ್ನು ಮಾಡಿದರು. ಅವರು ಕೆರೂಬಿಗಳ
ಚಿತ್ರಗಳನ್ನು ಪರದೆಗಳಲ್ಲಿ ಕಸೂತಿ ಹಾಕಿದರು. [9]ಪ್ರತಿ
ಪರದೆಯೂ ಒಂದೇ ಅಳತೆಯುಳ್ಳದ್ದಾಗಿ ಇಪ್ಪತ್ತೆಂಟು
ಮೊಳ ಉದ್ದವಾಗಿಯೂ ನಾಲ್ಕು ಮೊಳ ಅಗಲವಾಗಿಯೂ
ಇತ್ತು. [10]ಕೆಲಸಗಾರರು ಪರದೆಗಳನ್ನು ಒಟ್ಟಾಗಿ ಜೋಡಿಸಿ
ಪರದೆಗಳ ಎರಡು ಭಾಗಗಳನ್ನಾಗಿ ಮಾಡಿದರು. ಒಂದು
ಭಾಗದಲ್ಲಿ ಐದು ಪರದೆಗಳನ್ನೂ ಇನ್ನೊಂದು ಭಾಗದಲ್ಲಿ
ಐದು ಪರದೆಗಳನ್ನೂ ಒಟ್ಟಾಗಿ ಜೋಡಿಸಿದರು. [11]ಬಳಿಕ
ಅವರು ಒಂದು ಗುಂಪಿನ ಕೊನೆಯ ಪರದೆಯ ಅಂಚಿನಲ್ಲಿ
ಕುಣಿಕೆಗಳನ್ನು ಮಾಡಲು ನೀಲಿಬಟ್ಟೆಯನ್ನು ಉಪ
ಯೋಗಿಸಿದರು. ಇನ್ನೊಂದು ಗುಂಪಿನಲ್ಲಿದ್ದ ಕೊನೆಯ
ಪರದೆಯಲ್ಲೂ ಹಾಗೆಯೇ ಮಾಡಿದರು. [12]ಒಂದು
ಗುಂಪಿನ ಕೊನೆಯ ಪರದೆಯಲ್ಲೂ ಐವತ್ತು ಕುಣಿಕೆ
ಗಳಿದ್ದವು. ಇನ್ನೊಂದು ಗುಂಪಿನ ಕೊನೆಯ ಪರದೆ
ಯಲ್ಲೂ ಐವತ್ತು ಕುಣಿಕೆಗಳಿದ್ದವು. ಕುಣಿಕೆಗಳನ್ನು ಒಂದ
ಕ್ಕೊಂದು ಎದುರಾಗಿ ಇರಿಸಿದರು. [13]ಬಳಿಕ ಅವರು
ಐವತ್ತು ಚಿನ್ನದ ಬಳೆಗಳನ್ನು ಮಾಡಿ ಎರಡು ಪರದೆಗಳನ್ನು
ಒಟ್ಟಾಗಿ ಸೇರಿಸಿದರು. ಹೀಗೆ ಪವಿತ್ರ ಗುಡಾರವು
ಜೋಡಿಸಲ್ಪಟ್ಟು ಒಂದೇ ಗುಡಾರವಾಯಿತು.

[14]ಬಳಿಕ ಕೆಲಸಗಾರರು ಪವಿತ್ರಗುಡಾರವನ್ನು ಹೊದಿ
ಸುವುದಕ್ಕೆ ಇನ್ನೊಂದು ಗುಡಾರವನ್ನು ಮಾಡಿದರು. ಈ
ಗುಡಾರವನ್ನು ಮಾಡಲು ಹನ್ನೊಂದು ಪರದೆಗಳನ್ನು
ಉಪಯೋಗಿಸಿದರು. ಅವರು ಆಡುಕೂದಲಿನಿಂದ ಈ
ಪರದೆಗಳನ್ನು ಮಾಡಿದರು. [15]ಈ ಎಲ್ಲಾ ಪರದೆಗಳು
ಒಂದೇ ಅಳತೆಯುಳ್ಳದ್ದಾಗಿ ಮೂವತ್ತು ಮೊಳ ಉದ್ದ
ವಾಗಿಯೂ ನಾಲ್ಕು ಮೊಳ ಅಗಲವಾಗಿಯೂ ಇದ್ದವು.
[16]ಕೆಲಸಗಾರರು ಐದು ಪರದೆಗಳನ್ನು ಒಟ್ಟಾಗಿ ಸೇರಿಸಿ
ಒಂದು ಭಾಗವನ್ನಾಗಿ ಮಾಡಿದರು. ಬಳಿಕ ಅವರು ಇತರ
ಆರು ಪರದೆಗಳನ್ನು ಒಟ್ಟಾಗಿ ಸೇರಿಸಿ ಇನ್ನೊಂದು ಭಾಗವ
ನ್ನಾಗಿ ಮಾಡಿದರು. [17]ಅವರು ಒಂದು ಭಾಗದ ಕೊನೆಯ
ಪರದೆಯ ಅಂಚಿನಲ್ಲಿ ಐವತ್ತು ಕುಣಿಕೆಗಳನ್ನು ಇಟ್ಟರು.
ಇನ್ನೊಂದು ಭಾಗದ ಕೊನೆಯ ಪರದೆಯಲ್ಲಿಯೂ ಅದೇ
ರೀತಿಯಾಗಿ ಮಾಡಿದರು. [18]ಕೆಲಸಗಾರರು ಎರಡು
ಪರದೆಗಳನ್ನು ಒಟ್ಟಾಗಿ ಜೋಡಿಸಲು ಐವತ್ತು ತಾಮ್ರದ
ಬಳೆಗಳನ್ನು ಮಾಡಿದರು. ಇದು ಸಮಸ್ತವನ್ನು ಒಂದೇ
ಗುಡಾರವಾಗುವಂತೆ ಮಾಡಿತು. [19]ಬಳಿಕ ಅವರು ಪವಿತ್ರ
ಗುಡಾರಕ್ಕೆ ಎರಡು ಮೇಲ್ಹೊದಿಕೆಗಳನ್ನು ಮಾಡಿದರು.
ಒಂದು ಮೇಲ್ಹೊದಿಕೆಯನ್ನು ಕೆಂಪು ಬಣ್ಣದ ಕುರಿತೊಗ
ಲುಗಳಿಂದ ಮಾಡಿದರು; ಮತ್ತೊಂದು ಮೇಲ್ಹೊದಿ
ಕೆಯನ್ನು ನೀರೆಮ್ಮೆ ತೊಗಲಿನಿಂದ ಮಾಡಿದರು.

[20]ಬಳಿಕ ಕೆಲಸಗಾರರು ಪವಿತ್ರಗುಡಾರದ ಚೌಕಟ್ಟು
ಗಳನ್ನು ಜಾಲೀಮರದಿಂದ ಮಾಡಿದರು. [21]ಪ್ರತಿ
ಯೊಂದು ಚೌಕಟ್ಟು ಹತ್ತು ಮೊಳ ಉದ್ದವಾಗಿಯೂ
ಒಂದು ಮೊಳ ಅಗಲವಾಗಿಯೂ ಇತ್ತು. [22]ಎರಡು ಕಂಬ
ಗಳಿಗೆ ಎರಡು ಅಡ್ಡಕಂಬಗಳನ್ನು ಜೋಡಿಸಿ ಚೌಕಟ್ಟನ್ನು
ಮಾಡಲಾಗಿತ್ತು. ಪವಿತ್ರ ಗುಡಾರದ ಪ್ರತಿ ಚೌಕಟ್ಟನ್ನು
ಅದೇ ರೀತಿಯಲ್ಲಿ ಮಾಡಲಾಗಿತ್ತು. [23]ಪವಿತ್ರ ಗುಡಾರದ
ದಕ್ಷಿಣ ಭಾಗದಲ್ಲಿ ಇಪ್ಪತ್ತು ಚೌಕಟ್ಟುಗಳನ್ನು ಮಾಡಿ
ದರು. [24]ಬಳಿಕ ಅವರು ಚೌಕಟ್ಟುಗಳಿಗೆ ನಲವತ್ತು
ಬೆಳ್ಳಿಯ ಗದ್ದಿಗೇಕಲ್ಲುಗಳನ್ನು ಮಾಡಿದರು. ಒಂದು
ನಿಲುವು ಪಟ್ಟಿಗೆ ಒಂದರಂತೆ ಪ್ರತಿ ಚೌಕಟ್ಟಿಗೆ ಎರಡು
ಗದ್ದಿಗೇಕಲ್ಲುಗಳಿದ್ದವು. [25]ಅವರು ಪವಿತ್ರಗುಡಾರದ
ಇನ್ನೊಂದು ಕಡೆಯಲ್ಲಿ (ಉತ್ತರಭಾಗ) ಇಪ್ಪತ್ತು
ಚೌಕಟ್ಟುಗಳನ್ನು ಮಾಡಿದರು. [26]ಅವರು ಪ್ರತಿ ಚೌಕಟ್ಟಿಗೆ
ಎರಡು ಗದ್ದಿಗೇಕಲ್ಲುಗಳಂತೆ ನಲವತ್ತು ಬೆಳ್ಳಿಯ ಗದ್ದಿಗೇ
ಕಲ್ಲುಗಳನ್ನು ಮಾಡಿದರು. [27]ಅವರು ಪವಿತ್ರ ಗುಡಾರದ
ಹಿಂಭಾಗಕ್ಕೆ (ಪಶ್ಚಿಮಭಾಗ) ಇನ್ನೂ ಆರು ಚೌಕಟ್ಟು
ಗಳನ್ನು ಮಾಡಿದರು. [28]ಪವಿತ್ರಗುಡಾರದ ಹಿಂಭಾಗ
ದಲ್ಲಿನ ಮೂಲೆಗಳಿಗೂ ಎರಡು ಚೌಕಟ್ಟುಗಳನ್ನು ಮಾಡಿ
ದರು. [29]ಈ ಚೌಕಟ್ಟುಗಳು ಕೆಳಭಾಗಕ್ಕೆ ಒಟ್ಟಾಗಿ ಸೇರಿಸ
ಲ್ಪಟ್ಟಿದ್ದವು; ತುದಿಯಲ್ಲಿ ಒಂದು ಬಳೆಯು ಮೂಲೆ ಚೌಕ
ಟ್ಟುಗಳನ್ನು ಒಟ್ಟಿಗೆ ಹಿಡಿದುಕೊಂಡಿದ್ದವು. ಅವರು
ಎರಡೂ ಮೂಲೆಗಳಿಗೆ ಹಾಗೆಯೇ ಮಾಡಿದರು. [30]ಪವಿತ್ರ
ಗುಡಾರದ ಪಶ್ಚಿಮದಿಕ್ಕಿನಲ್ಲಿ ಒಟ್ಟು ಎಂಟು ಚೌಕಟ್ಟು
ಗಳಿದ್ದವು. ಪ್ರತಿ ಚೌಕಟ್ಟಿಗೆ ಎರಡು ಗದ್ದಿಗೇಕಲ್ಲುಗಳಂತೆ
ಹದಿನಾರು ಬೆಳ್ಳಿಯ ಗದ್ದಿಗೇಕಲ್ಲುಗಳಿದ್ದವು.

[31]ಬಳಿಕ ಕೆಲಸಗಾರರು ಚೌಕಟ್ಟುಗಳಿಗೆ ಅಗುಳಿಗಳನ್ನು
ಮಾಡಲು ಜಾಲೀಮರವನ್ನು ಉಪಯೋಗಿಸಿದರು.
ಪವಿತ್ರ ಗುಡಾರದ ಮೊದಲಿನ ಕಡೆಯಲ್ಲಿ ಐದು
ಅಗುಳಿಗಳೂ [32]ಇನ್ನೊಂದು ಕಡೆಯಲ್ಲಿ ಐದು ಅಗುಳಿ
ಗಳೂ ಪವಿತ್ರಗುಡಾರದ ಹಿಂಭಾಗದಲ್ಲಿ (ಅಂದರೆ
ಪಶ್ಚಿಮ ಭಾಗದಲ್ಲಿ) ಐದು ಅಗುಳಿಗಳೂ ಇದ್ದವು.
[33]ಚೌಕಟ್ಟುಗಳನ್ನು ಒಂದು ಕೊನೆಯಿಂದ ಇನ್ನೊಂದು
ಕೊನೆಯವರೆಗೂ ಹಾದುಹೋಗುವಂತೆ ಅವರು ಮಧ್ಯದ
ಅಗುಳಿಯನ್ನು ಮಾಡಿದರು. [34]ಅವರು ಈ ಚೌಕಟ್ಟು
ಗಳನ್ನು ಚಿನ್ನದಿಂದ ಹೊದಿಸಿದರು. ಅಗುಳಿಗಳಿಗಾಗಿ

ಚಿನ್ನದ ಕೊಂಡಿಗಳನ್ನು ಮಾಡಿದರು; ಅಗುಳಿಗಳನ್ನು ಚಿನ್ನ
ದಿಂದ ಹೊದಿಸಿದರು.
[35]ಅತಿಪವಿತ್ರಸ್ಥಳದ ದ್ವಾರಕ್ಕೆ ವಿಶೇಷ ಪರದೆಯನ್ನು
ಮಾಡಲು ಅವರು ಶ್ರೇಷ್ಠ ನಾರುಬಟ್ಟೆಯನ್ನು ನೀಲಿ,
ನೇರಳೆ, ಕೆಂಪು ದಾರಗಳನ್ನು ಉಪಯೋಗಿಸಿದರು.
ಅವರು ಕೆರೂಬಿಗಳ ಚಿತ್ರಗಳನ್ನು ಪರದೆಯಲ್ಲಿ ಕಸೂತಿ
ಹಾಕಿದರು. [36]ಅವರು ಜಾಲೀಮರದಿಂದ ನಾಲ್ಕು ಕಂಬ
ಗಳನ್ನು ಮಾಡಿದರು ಮತ್ತು ಕಂಬಗಳನ್ನು ಚಿನ್ನದಿಂದ
ಹೊದಿಸಿದರು. ಬಳಿಕ ಅವರು ಕಂಬಗಳಿಗೆ ಚಿನ್ನದ ಕೊಂಡಿ
ಗಳನ್ನು ಮಾಡಿದರು. ಅವರು ಕಂಬಗಳಿಗೆ ನಾಲ್ಕು ಬೆಳ್ಳಿಯ
ಗದ್ದಿಗೇಕಲ್ಲುಗಳನ್ನು ಮಾಡಿದರು. [37]ಬಳಿಕ ಗುಡಾರದ
ಬಾಗಿಲಿಗೆ ಪರದೆಯನ್ನು ಮಾಡಿದರು. ಅವರು ಈ ಪರದೆ
ಯನ್ನು ನೀಲಿ, ನೇರಳೆ, ಕೆಂಪು ದಾರವನ್ನು ಶ್ರೇಷ್ಠ ನಾರು
ಬಟ್ಟೆಯನ್ನು ಉಪಯೋಗಿಸಿದರು. ಮತ್ತು ಅವರು ಚಿತ್ರ
ಗಳನ್ನು ಅದರಲ್ಲಿ ಹೆಣೆದರು.
[38]ಬಳಿಕ ಅವರು ಐದು ಕಂಬಗಳನ್ನೂ ಬಾಗಿಲಿನ
ಪರದೆಗೆ ಕೊಂಡಿಗಳನ್ನೂ ಮಾಡಿದರು. ಅವರು ಕಂಬಗಳ
ತುದಿಗಳನ್ನು ಮತ್ತು ಪರದೆಯ ಕೋಲುಗಳನ್ನು ಚಿನ್ನ
ದಿಂದ ಹೊದಿಸಿದರು. ಅವರು ಕಂಬಗಳಿಗೆ ಐದು ತಾಮ್ರದ
ಗದ್ದಿಗೇಕಲ್ಲುಗಳನ್ನು ಮಾಡಿದರು.

## ಒಡಂಬಡಿಕೆ ಪೆಟ್ಟಿಗೆ *

37 ಬೆಚಲೇಲನು ಜಾಲೀಮರದಿಂದ ಪವಿತ್ರ ಪೆಟ್ಟಿಗೆ
ಯನ್ನು ಮಾಡಿದನು. ಪೆಟ್ಟಿಗೆಯು ಎರಡುವರೆ
ಮೊಳ ಉದ್ದ ಒಂದೂವರೆ ಮೊಳ ಅಗಲ ಮತ್ತು ಒಂದೂ
ವರೆ ಮೊಳ ಎತ್ತರವಿತ್ತು. [2]ಪೆಟ್ಟಿಗೆಯ ಹೊರಗಿನ ಮತ್ತು
ಒಳಗಿನ ಭಾಗವನ್ನು ಅಪ್ಪಟ ಬಂಗಾರದಿಂದ ಹೊದಿ
ಸಿದನು. ಬಳಿಕ ಪೆಟ್ಟಿಗೆಯ ಸುತ್ತಲೂ ಚಿನ್ನದ ಗೋಟು
ಕಟ್ಟಿಸಿದನು. [3]ಅವನು ಚಿನ್ನದ ನಾಲ್ಕು ಬಳೆಗಳನ್ನು ಮಾಡಿಸಿ
ಪೆಟ್ಟಿಗೆಯ ನಾಲ್ಕು ಮೂಲೆಗಳಲ್ಲಿ ಇರಿಸಿದನು. ಈ ಬಳೆ
ಗಳು ಪೆಟ್ಟಿಗೆಯನ್ನು ಹೊತ್ತುಕೊಂಡು ಹೋಗಲು ಉಪ
ಯೋಗಿಸಲ್ಪಡುತ್ತಿದ್ದವು. ಪ್ರತಿಯೊಂದು ಬದಿಯಲ್ಲೂ
ಎರಡು ಬಳೆಗಳಿದ್ದವು. [4]ಬಳಿಕ ಪೆಟ್ಟಿಗೆಯನ್ನು ಹೊರುವು
ದಕ್ಕಾಗಿ ಕೋಲುಗಳನ್ನು ಜಾಲೀಮರದಿಂದ ಮಾಡಿಸಿ
ದನು. ಅದನ್ನು ಅಪ್ಪಟ ಬಂಗಾರದಿಂದ ಹೊದಿಸಿದನು.
[5]ಪೆಟ್ಟಿಗೆಯ ಪಾರ್ಶ್ವಗಳಲ್ಲಿರುವ ಬಳೆಗಳಲ್ಲಿ ಅವನು
ಕೋಲುಗಳನ್ನು ಸೇರಿಸಿದನು. [6]ಬಳಿಕ ಅವನು ಅಪ್ಪಟ
ಬಂಗಾರದ ಕೃಪಾಸನವನ್ನು ಮಾಡಿಸಿದನು. ಅದು ಎರಡೂ
ವರೆ ಮೊಳ ಉದ್ದ ಮತ್ತು ಒಂದೂವರೆ ಮೊಳ ಅಗಲ ಇತ್ತು.
[7]ಬಳಿಕ ಬೆಚಲೇಲನು ಬಂಗಾರವನ್ನು ಸುತ್ತಿಗೆಯಿಂದ ಕೆತ್ತಿ
ಎರಡು ಕೆರೂಬಿಗಳ ಆಕಾರಗಳನ್ನು ಮಾಡಿದನು. ಅವನು
ಕೆರೂಬಿದೂತರನ್ನು ಕೃಪಾಸನದ ಕೊನೆಗಳಲ್ಲಿ ಇಟ್ಟನು.
[8]ಒಂದು ಕೆರೂಬಿಯನ್ನು ಕೃಪಾಸನದ ಒಂದು ಕೊನೆ
ಯಲ್ಲೂ ಇನ್ನೊಂದನ್ನು ಮತ್ತೊಂದು ಕೊನೆಯಲ್ಲೂ
ಇಟ್ಟನು. ಅವುಗಳನ್ನು ಒಟ್ಟಾಗಿ ಕೃಪಾಸನಕ್ಕೆ ಜೋಡಿಸಿ
ಒಂದೇ ವಸ್ತುವನ್ನಾಗಿ ಮಾಡಿದನು. [9]ಕೆರೂಬಿಗಳ ರೆಕ್ಕೆ
ಗಳು ಆಕಾಶದ ಕಡೆಗೆ ಚಾಚಿದ್ದವು. ಅವುಗಳು ಪೆಟ್ಟಿಗೆ
ಯನ್ನು ತಮ್ಮ ರೆಕ್ಕೆಗಳಿಂದ ಮುಚ್ಚಿದ್ದವು. ಅವುಗಳ
ಮುಖಗಳು ಎದುರುಬದುರಾಗಿ ಕೃಪಾಸನವನ್ನು
ನೋಡುತ್ತಿದ್ದವು.

## ವಿಶೇಷ ಮೇಜು

[10]ತರುವಾಯ, ಅವನು ಜಾಲೀಮರದಿಂದ ಮೇಜನ್ನು
ಮಾಡಿದನು. ಮೇಜು ಎರಡು ಮೊಳ ಉದ್ದ, ಒಂದು
ಮೊಳ ಅಗಲ ಮತ್ತು ಒಂದೂವರೆ ಮೊಳ ಎತ್ತರ ಇತ್ತು.
[11]ಅವನು ಮೇಜನ್ನು ಅಪ್ಪಟ ಬಂಗಾರದಿಂದ ಹೊದಿಸಿ
ದನು; ಮೇಜಿನ ಸುತ್ತಲೂ ಚಿನ್ನದ ಗೋಟನ್ನು ಕಟ್ಟಿಸಿ
ದನು. [12]ಬಳಿಕ ಅವನು ಮೇಜಿಗೆ ಮೂರು ಇಂಚು ಅಗ
ಲದ ಚೌಕಟ್ಟನ್ನು ಮಾಡಿದನು; ಆ ಚೌಕಟ್ಟಿಗೆ ಚಿನ್ನದ
ಗೋಟನ್ನು ಕಟ್ಟಿಸಿದನು. [13]ಬಳಿಕ ಅವನು ನಾಲ್ಕು ಚಿನ್ನದ
ಬಳೆಗಳನ್ನು ಮಾಡಿಸಿ ಮೇಜಿನ ನಾಲ್ಕು ಕಾಲುಗಳಿರುವ
ನಾಲ್ಕು ಮೂಲೆಗಳಲ್ಲಿ ಅವುಗಳನ್ನು ಇರಿಸಿದನು. [14]ಅವನು
ಬಳೆಗಳನ್ನು ಮೇಜಿನ ತುದಿಯಲ್ಲಿರುವ ಚೌಕಟ್ಟಿಗೆ
ಹತ್ತಿರವಾಗಿ ಇರಿಸಿದನು. ಕೋಲುಗಳಿಂದ ಮೇಜನ್ನು
ಹೊರುವುದಕ್ಕಾಗಿ ಈ ಬಳೆಗಳು ಇದ್ದವು. [15]ಬಳಿಕ
ಮೇಜನ್ನು ಹೊರುವುದಕ್ಕಾಗಿ ಉಪಯೋಗಿಸಲ್ಪಡುತ್ತಿದ್ದ
ಕೋಲುಗಳನ್ನು ಜಾಲೀಮರದಿಂದ ಮಾಡಿದನು.
ಕೋಲುಗಳನ್ನು ಅಪ್ಪಟ ಬಂಗಾರದಿಂದ ಹೊದಿಸಿದನು.
[16]ಬಳಿಕ ಅವನು ಮೇಜಿನಲ್ಲಿ ಉಪಯೋಗಿಸಲ್ಪಡುತ್ತಿದ್ದ
ಎಲ್ಲಾ ವಸ್ತುಗಳನ್ನು ಮಾಡಿದನು. ಅವನು ಅಪ್ಪಟ
ಬಂಗಾರದ ತಟ್ಟೆ, ಚಮಚ, ಬೋಗುಣಿ ಮತ್ತು ಹೂಜಿ
ಗಳನ್ನು ಮಾಡಿದನು. ಬೋಗುಣಿ ಮತ್ತು ಹೂಜಿಗಳು
ಪಾನದ್ರವ್ಯ ಸಮರ್ಪಣೆಗಳನ್ನು ಅರ್ಪಿಸುವುದಕ್ಕೆ ಉಪ
ಯುಕ್ತವಾಗಿದ್ದವು.

## ದೀಪಸ್ತಂಭ

[17]ಬಳಿಕ ಅವನು ದೀಪಸ್ತಂಭವನ್ನು ಮಾಡಿದನು.
ಅವನು ಅಪ್ಪಟ ಬಂಗಾರದಿಂದ ಕಂಬವನ್ನು ಮಾಡಿದನು.
ತರುವಾಯ ಹೂವು, ಮೊಗ್ಗು, ಮತ್ತು ದಳಗಳನ್ನು ಮಾಡಿ
ಜೋಡಿಸಿದನು. ಹೀಗೆ ಅವು ಪುಷ್ಪಾಲಂಕಾರವಾದ
ಒಂದೇ ವಸ್ತುವಾಯಿತು. [18]ದೀಪಸ್ತಂಭಕ್ಕೆ ಆರು ಕೊಂಬೆ
ಗಳಿದ್ದವು. ಮೂರು ಕೊಂಬೆಗಳು ಒಂದು ಕಡೆಯಲ್ಲೂ

**ಒಡಂಬಡಿಕೆ ಪೆಟ್ಟಿಗೆ** ಅಥವಾ ಒಡಂಬಡಿಕೆಯ ಮಂಜೂಷ.

ಇನ್ನು ಮೂರು ಕೊಂಬೆಗಳು ಇನ್ನೊಂದು ಕಡೆಯ
ಲ್ಲಿಯೂ ಇದ್ದವು. 19ಪ್ರತಿಯೊಂದು ಕೊಂಬೆಗಳಲ್ಲಿ
ಮೂರು ಮೂರು ಹೂವುಗಳಿದ್ದವು. ಈ ಹೂವುಗಳು
ಮೊಗ್ಗು, ದಳಗಳಿಂದ ಕೂಡಿದ ಬಾದಾಮಿಹೂವುಗಳಂತೆ
ಮಾಡಲ್ಪಟ್ಟವು. 20ದೀಪಸ್ತಂಭದ ಕಂಬದಲ್ಲಿ ಇನ್ನೂ
ನಾಲ್ಕು ಹೂವುಗಳಿದ್ದವು. ಅವುಗಳು ಸಹ ಮೊಗ್ಗು, ದಳಗ
ಳಿಂದ ಕೂಡಿದ ಬಾದಾಮಿಯ ಹೂವುಗಳಂತೆ ಮಾಡಲ್ಪ
ಟ್ಟವು. 21ಕಂಬದ ಪ್ರತಿಯೊಂದು ಕಡೆಯಲ್ಲಿ ಮೂರು
ಮೂರು ಕೊಂಬೆಗಳಂತೆ ಆರು ಕೊಂಬೆಗಳಿದ್ದವು.
ಕೊಂಬೆಗಳು ಕವಲೊಡೆದಿರುವ ಮೂರು ಸ್ಥಳಗಳಲ್ಲೂ
ಒಂದೊಂದು ಹೂವು ಇತ್ತು. ಆ ಹೂವಿಗೆ ಮೊಗ್ಗುಗಳು
ಮತ್ತು ದಳಗಳು ಇದ್ದವು. 22ಹೂವು ಮತ್ತು ಕೊಂಬೆಗ
ಳಿಂದ ಕೂಡಿದ ಇಡೀ ದೀಪಸ್ತಂಭವು ಅಪ್ಪಟ ಬಂಗಾರ
ದಿಂದ ಅಖಂಡವಾಗಿ ಮಾಡಲ್ಪಟ್ಟಿತ್ತು. 23ಅವನು ಈ ದೀಪ
ಸ್ತಂಭಕ್ಕೆ ಏಳು ಹಣತೆಗಳನ್ನು ಮಾಡಿದನು; ಬಳಿಕ ಅಪ್ಪಟ
ಬಂಗಾರದಿಂದ ಬತ್ತಿಗಳನ್ನು ಸರಿಪಡಿಸುವ ಕತ್ತರಿಗಳನ್ನೂ
ಹರಿವಾಣಗಳನ್ನೂ ಮಾಡಿದನು. 24ದೀಪಸ್ತಂಭವನ್ನು
ಮತ್ತು ಅದರ ಉಪಕರಣಗಳನ್ನು ಮಾಡಲು ಎಪ್ಪತ್ತೈದು
ಪೌಂಡು ಅಪ್ಪಟ ಬಂಗಾರವನ್ನು ಉಪಯೋಗಿಸಿದನು.

### ಧೂಪವೇದಿಕೆ

25ಅವನು ಧೂಪವೇದಿಕೆಯನ್ನು ಜಾಲೀಮರದಿಂದ
ಮಾಡಿದನು. ಧೂಪವೇದಿಕೆಯು ಚಚ್ಚೌಕವಾಗಿತ್ತು.
ಅದು ಒಂದು ಮೊಳ ಉದ್ದ, ಒಂದು ಮೊಳ ಅಗಲ ಮತ್ತು
ಎರಡು ಮೊಳ ಎತ್ತರ ಇತ್ತು. ಧೂಪವೇದಿಕೆಯಲ್ಲಿ ನಾಲ್ಕು
ಕೊಂಬುಗಳಿದ್ದವು. ಪ್ರತಿ ಮೂಲೆಯಲ್ಲಿಯೂ
ಒಂದೊಂದು ಕೊಂಬುಗಳಿದ್ದವು. ಈ ಕೊಂಬುಗಳು
ಒಟ್ಟಾಗಿ ಧೂಪವೇದಿಕೆಗೆ ಜೋಡಿಸಲ್ಪಟ್ಟು ಅವಿಭಾಜ್ಯ
ವಾಗಿತ್ತು. 26ಅವನು ಅಪ್ಪಟ ಬಂಗಾರದಿಂದ ಮೇಲ್ಭಾಗ
ವನ್ನೂ ಎಲ್ಲಾ ಪಾರ್ಶ್ವಗಳನ್ನೂ ಕೊಂಬುಗಳನ್ನೂ ಹೊದಿಸಿ
ದನು. ಬಳಿಕ ಅವನು ಧೂಪವೇದಿಕೆಯ ಸುತ್ತಲೂ ಚಿನ್ನದ
ಗೋಟನ್ನು ಕಟ್ಟಿಸಿದನು. 27ಅವನು ಧೂಪವೇದಿಕೆಗೆ
ಎರಡು ಚಿನ್ನದ ಬಳೆಗಳನ್ನು ಮಾಡಿಸಿ ಗೋಟಿನ ಕೆಳಗೆ
ವೇದಿಕೆಯ ಪ್ರತಿಯೊಂದು ಬದಿಯಲ್ಲಿ ಇರಿಸಿದನು. ಈ
ಚಿನ್ನದ ಬಳೆಗಳು ವೇದಿಕೆಯನ್ನು ಕೋಲುಗಳ ಮೂಲಕ
ಹೊರುವುದಕ್ಕೆ ಉಪಯುಕ್ತವಾಗಿದ್ದವು. 28ಅವನು
ಜಾಲೀಮರದಿಂದ ಕೋಲುಗಳನ್ನು ಮಾಡಿಸಿ ಚಿನ್ನದಿಂದ
ಅವುಗಳನ್ನು ಹೊದಿಸಿದನು.

29ತರುವಾಯ ಅವನು ಪವಿತ್ರವಾದ ಅಭಿಷೇಕ ತೈಲ
ವನ್ನು ಮಾಡಿದನು. ಅವನು ಶುದ್ಧವಾದ ಪರಿಮಳ ಧೂಪ
ವನ್ನು ಮಾಡಿದನು. ಸುಗಂಧದ್ರವ್ಯಕಾರರ ವಿದ್ಯೆಯ
ಮೇರೆಗೆ ಈ ವಸ್ತುಗಳನ್ನು ಮಾಡಲಾಯಿತು.

### ಯಜ್ಞವೇದಿಕೆ

38 ತರುವಾಯ ಬೆಚಲೇಲನು ಯಜ್ಞವೇದಿಕೆ
ಯನ್ನು ಜಾಲೀಮರದಿಂದ ಮಾಡಿದನು. ಈ
ವೇದಿಕೆಯು ಸರ್ವಾಂಗಹೋಮಗಳನ್ನು ಅರ್ಪಿಸುವುದಕ್ಕೆ
ಕಟ್ಟಲ್ಪಟ್ಟಿತ್ತು. ವೇದಿಕೆಯು ಚಚ್ಚೌಕವಾಗಿತ್ತು. ಅದು
ಐದು ಮೊಳ ಉದ್ದ, ಐದು ಮೊಳ ಅಗಲ ಮತ್ತು ಮೂರು
ಮೊಳ ಎತ್ತರ ಇತ್ತು. 2ಅವನು ಯಜ್ಞವೇದಿಕೆಯ ನಾಲ್ಕು
ಮೂಲೆಗಳಲ್ಲಿ ಒಂದೊಂದು ಕೊಂಬುಗಳನ್ನು ಇಟ್ಟು ಪ್ರತಿ
ಯೊಂದು ಕೊಂಬನ್ನು ಅದರ ಮೂಲೆಗೆ ಸೇರಿಸಿದನು.
ಹೀಗಾಗಿ ಪ್ರತಿಯೊಂದೂ ಅಖಂಡವಾದ ಒಂದೇ ವಸ್ತುವಿ
ನಂತಾಯಿತು. ಅವನು ಯಜ್ಞವೇದಿಕೆಯನ್ನು ತಾಮ್ರ
ದಿಂದ ಹೊದಿಸಿದನು. 3ಬಳಿಕ ವೇದಿಕೆಯಲ್ಲಿ ಉಪ
ಯೋಗಿಸುವ ಎಲ್ಲಾ ಉಪಕರಣಗಳನ್ನು ಅಂದರೆ ಮಡಿಕೆ
ಗಳು, ಸಲಿಕೆಗಳು, ಬೋಗುಣಿಗಳು, ಮುಳ್ಳುಗಳು ಮತ್ತು
ಅಗ್ನಿಷ್ಟಿಕೆಗಳನ್ನು ತಾಮ್ರದಿಂದ ಮಾಡಿದನು. 4ಬಳಿಕ
ಅವನು ವೇದಿಕೆಗೆ ತಾಮ್ರದ ಜಾಳಿಗೆಯನ್ನು ಮಾಡಿದನು.
ಜಾಳಿಗೆಯು ಹೆಣಿಗೆ ಕೆಲಸದಿಂದ ಮಾಡಲಾಗಿತ್ತು. ಜಾಳಿ
ಗೆಯು ವೇದಿ ಕೆಯ ಕೆಳಭಾಗದಲ್ಲಿರುವ ಕಟ್ಟೆಯ ಕೆಳಗೆ
ಇಡಲ್ಪಟ್ಟಿತ್ತು. ಅದು ಕೆಳಗಿನಿಂದ ವೇದಿಕೆಯ ಅರ್ಧ
ಭಾಗದಷ್ಟು ಮೇಲಕ್ಕೆ ಹೋಯಿತು. 5ಬಳಿಕ ಅವನು
ತಾಮ್ರದ ಬಳೆಗಳನ್ನು ಮಾಡಿದನು. ಈ ಬಳೆಗಳು ವೇದಿಕೆ
ಯನ್ನು ಕೋಲುಗಳಿಂದ ಹೊರುವುದಕ್ಕೆ ಉಪಯುಕ್ತ
ವಾಗಿದ್ದವು. ಅವನು ಬಳೆಗಳನ್ನು ಜಾಳಿಗೆಯ ನಾಲ್ಕು
ಮೂಲೆಗಳಲ್ಲಿ ಇಟ್ಟನು. 6ಬಳಿಕ ಅವನು ಜಾಲೀ ಮರ
ದಿಂದ ಕೋಲುಗಳನ್ನು ಮಾಡಿ ಅವುಗಳನ್ನು ತಾಮ್ರದಿಂದ
ಹೊದಿಸಿದನು. 7ಅವನು ವೇದಿಕೆಯ ಪಾರ್ಶ್ವಗಳಲ್ಲಿದ್ದ
ಬಳೆಗಳಲ್ಲಿ ಕೋಲುಗಳನ್ನು ಸೇರಿಸಿದನು. ಕೋಲುಗಳು
ವೇದಿಕೆಯನ್ನು ಹೊರುವುದಕ್ಕಾಗಿ ಉಪಯುಕ್ತವಾಗಿ
ದ್ದವು. ಅವನು ವೇದಿಕೆಯನ್ನು ಪೆಟ್ಟಿಗೆಯಂತೆ ಮಾಡಲು
ಹಲಗೆಗಳನ್ನು ಉಪಯೋಗಿಸಿದನು. ಅದು ಟೊಳ್ಳಾಗಿತ್ತು.
8ಅವನು ತಾಮ್ರದಿಂದ ಗಂಗಾಳವನ್ನೂ ಅದರ ಪೀಠ
ವನ್ನೂ ಮಾಡಿದನು. ದೇವದರ್ಶನಗುಡಾರದ ಬಾಗಿಲಲ್ಲಿ
ಸೇವೆ ಮಾಡುತ್ತಿದ್ದ ಸ್ತ್ರೀಯರು ಕೊಟ್ಟ ತಾಮ್ರದ ದರ್ಪಣ
ಗಳನ್ನು ಅದಕ್ಕೆ ಉಪಯೋಗಿಸಿದನು.

### ಪವಿತ್ರಗುಡಾರದ ಸುತ್ತಲಿನ ಅಂಗಳ

9ಬಳಿಕ ಅವನು ಅಂಗಳವನ್ನು ಮಾಡಿದನು. ದಕ್ಷಿಣ
ಭಾಗದಲ್ಲಿ ನೂರು ಮೊಳ ಉದ್ದದ ಪರದೆಯ ಗೋಡೆ
ಯನ್ನು ಮಾಡಿದನು. ಪರದೆಗಳು ಶ್ರೇಷ್ಠ ನಾರುಬಟ್ಟೆ
ಯಿಂದ ಮಾಡಲಾಗಿದ್ದವು. 10ದಕ್ಷಿಣಭಾಗದಲ್ಲಿದ್ದ ಪರದೆ
ಗಳಿಗೆ ಇಪ್ಪತ್ತು ಕಂಬಗಳಿದ್ದವು. ಕಂಬಗಳಿಗೆ ಇಪ್ಪತ್ತು
ತಾಮ್ರದ ಗದ್ದಿಗೇಕಲ್ಲುಗಳಿದ್ದವು. ಕಂಬಗಳ ಕೊಂಡಿಗಳು

ಮತ್ತು ಪರದೆಯ ಕೋಲುಗಳು ಬೆಳ್ಳಿಯಿಂದ ಮಾಡಲ್ಪ
ಟ್ಟಿದ್ದವು. 11ಅಂಗಳದ ಉತ್ತರಭಾಗದಲ್ಲಿಯೂ ಮೂರು
ಮೊಳ ಉದ್ದದ ಪರದೆಗಳ ಗೋಡೆಯಿತ್ತು. ಅವುಗಳಿಗೆ
ಇಪ್ಪತ್ತು ಕಂಬಗಳು, ಇಪ್ಪತ್ತು ತಾಮ್ರದ ಗದ್ದಿಗೇಕಲ್ಲುಗಳು
ಇದ್ದವು. ಕಂಬಗಳ ಕೊಂಡಿಗಳು ಮತ್ತು ಪರದೆಯ
ಕೋಲುಗಳು ಬೆಳ್ಳಿಯಿಂದ ಮಾಡಲ್ಪಟ್ಟಿದ್ದವು.

12ಅಂಗಳದ ಪಶ್ಚಿಮಭಾಗದಲ್ಲಿ ಪರದೆಗಳ
ಗೋಡೆಯು ಐವತ್ತು ಮೊಳ ಉದ್ದವಾಗಿತ್ತು. ಅಲ್ಲಿ ಹತ್ತು
ಕಂಬಗಳೂ ಹತ್ತು ಗದ್ದಿಗೇಕಲ್ಲುಗಳೂ ಇದ್ದವು. ಕಂಬಗಳ
ಕೊಂಡಿಗಳು ಮತ್ತು ಪರದೆಯ ಕೋಲುಗಳು ಬೆಳ್ಳಿ
ಯಿಂದ ಮಾಡಲ್ಪಟ್ಟಿದ್ದವು.

13ಅಂಗಳದ ಪೂರ್ವಭಾಗವು ಐವತ್ತು ಮೊಳ
ಅಗಲವಾಗಿತ್ತು. ಅಂಗಳದ ಪ್ರವೇಶದ್ವಾರವು ಈ ಭಾಗ
ದಲ್ಲಿತ್ತು. 14ಬಾಗಿಲಿನ ಒಂದು ಕಡೆಯಲ್ಲಿ ಪರದೆಗಳ
ಗೋಡೆಯು ಹದಿನೈದು ಮೊಳ ಉದ್ದವಾಗಿತ್ತು. ಈ ಕಡೆ
ಯಲ್ಲಿ ಮೂರು ಕಂಬಗಳೂ ಮೂರು ಗದ್ದಿಗೇಕಲ್ಲುಗಳೂ
ಇದ್ದವು. 15ಬಾಗಿಲಿನ ಇನ್ನೊಂದು ಕಡೆಯಲ್ಲೂ ಪರದೆಗಳ
ಗೋಡೆಯು ಹದಿನೈದು ಮೊಳ ಉದ್ದವಾಗಿತ್ತು. ಆ ಕಡೆ
ಯಲ್ಲಿ ಮೂರು ಕಂಬಗಳೂ ಮೂರು ಗದಿಗೆಕಲ್ಲೂಗಳೂ
ಇದ್ದವು. 16ಅಂಗಳದ ಸುತ್ತಲಿದ್ದ ಪರದೆಗಳೆಲ್ಲಾ ಶ್ರೇಷ್ಠ
ನಾರುಬಟ್ಟೆಯಿಂದ ಮಾಡಲ್ಪಟ್ಟಿದ್ದವು. 17ಕಂಬಗಳ
ಗದ್ದಿಗೇಕಲ್ಲುಗಳನ್ನು ತಾಮ್ರದಿಂದ ಮಾಡಲಾಗಿತ್ತು.
ಕೊಂಡಿಗಳನ್ನು ಮತ್ತು ಪರದೆಯ ಕೋಲುಗಳನ್ನು ಬೆಳ್ಳಿ
ಯಿಂದ ಮಾಡಲಾಗಿತ್ತು. ಕಂಬಗಳ ತುದಿಗಳನ್ನೂ ಬೆಳ್ಳಿ
ಯಿಂದ ಹೊದಿಸಲಾಗಿತ್ತು. ಅಂಗಳದಲ್ಲಿದ್ದ ಕಂಬಗಳಿ
ಗೆಲ್ಲಾ ಬೆಳ್ಳಿಯಿಂದ ಮಾಡಿದ ಪರದೆಯ ಕೋಲು
ಗಳಿದ್ದವು.

18ಅಂಗಳದ ಬಾಗಿಲಿನ ಪರದೆಯು ಶ್ರೇಷ್ಠ ನಾರುಬಟ್ಟೆ
ಯಿಂದಲೂ, ನೀಲಿ, ನೇರಳೆ, ಕೆಂಪು ದಾರಗಳಿಂದಲೂ
ಮಾಡಲಾಗಿತ್ತು. ಪರದೆಯಲ್ಲಿ ನಕಾಸಿ ಕೆಲಸ ಮಾಡ
ಲಾಗಿತ್ತು. ಪರದೆಯು ಇಪ್ಪತ್ತು ಮೊಳ ಉದ್ದ ಮತ್ತು ಐದು
ಮೊಳ ಅಗಲವಾಗಿತ್ತು. ಅಂಗಳದ ಸುತ್ತಲಿದ್ದ ಎಲ್ಲಾ ಪರದೆ
ಗಳ ಎತ್ತರ ಒಂದೇ ಆಗಿತ್ತು. 19ಪರದೆಗಳಿಗೆ ನಾಲ್ಕು ಕಂಬ
ಗಳು ಮತ್ತು ನಾಲ್ಕು ತಾಮ್ರದ ಗದ್ದಿಗೇಕಲ್ಲುಗಳು ಇದ್ದವು.
ಕಂಬಗಳ ಕೊಂಡಿಗಳನ್ನು ಬೆಳ್ಳಿಯಿಂದ ಮಾಡಲಾಗಿತ್ತು.
ಕಂಬಗಳ ತುದಿಗಳು ಬೆಳ್ಳಿಯಿಂದ ಮಾಡಲ್ಪಟ್ಟಿದ್ದವು.
20ಪವಿತ್ರಗುಡಾರದ ಎಲ್ಲಾ ಗೂಟಗಳು ಮತ್ತು ಅಂಗಳದ
ಸುತ್ತಲಿದ್ದ ಪರದೆಗಳ ಗೂಟಗಳು ತಾಮ್ರದಿಂದ
ಮಾಡಲ್ಪಟ್ಟಿದ್ದವು.

21ಒಡಂಬಡಿಕೆಯ ಗುಡಾರವಾದ ಪವಿತ್ರ ಗುಡಾರ
ವನ್ನು ಮಾಡಲು ಉಪಯೋಗಿಸಿದ ಎಲ್ಲಾ ವಸ್ತುಗಳನ್ನು
ಬರೆದಿಡಬೇಕೆಂದು ಮೋಶೆಯು ಲೇವಿಯರಿಗೆ
ಆಜ್ಞಾಪಿಸಿದನು. ಈ ಪಟ್ಟಿಯು ಆರೋನನ ಮಗನಾದ
ಈತಾಮಾರನ ವಶದಲ್ಲಿ ಇತ್ತು.

22ಯೆಹೋವನು ಮೋಶೆಗೆ ಆಜ್ಞಾಪಿಸಿದ ಪ್ರತಿ
ಯೊಂದನ್ನೂ ಯೆಹೂದಕುಲದ ಹೂರನ ಮೊಮ್ಮಗನೂ
ಊರಿಯನ ಮಗನೂ ಆದ ಬೆಚಲೇಲನು ಮಾಡಿದನು.
23ದಾನ್‌ಕುಲದ ಅಹೀಸಾಮಾಕನ ಮಗನಾದ ಒಹೋ
ಲೀಯಾಬನು ಅವನಿಗೆ ಸಹಾಯ ಮಾಡಿದನು. ಒಹೋ
ಲೀಯಾಬನು ನಿಪುಣನಾದ ಕೆಲಸಗಾರನೂ ನಕಾಸಿ ಕೆಲಸ
ಮಾಡುವವನೂ ಆಗಿದ್ದನು. ಅವನು ಶ್ರೇಷ್ಠ ನಾರುಬಟ್ಟೆ
ಯಲ್ಲಿ ನೀಲಿ, ನೇರಳೆ, ಕೆಂಪು ದಾರಗಳಿಂದ ಬುಟೇದಾರಿ
ಕೆಲಸ ಮಾಡಲು ನಿಪುಣನಾಗಿದ್ದನು.

24ಪವಿತ್ರ ಸ್ಥಳಕ್ಕಾಗಿ ಎರಡು ಟನ್‌ಗಿಂತ ಹೆಚ್ಚು ಬಂಗಾ
ರವು ಯೆಹೋವನಿಗೆ ಕಾಣಿಕೆಯಾಗಿ ಕೊಡಲ್ಪಟ್ಟಿತು.
(ಅಧಿಕೃತ ಅಳತೆಯನ್ನು ಉಪಯೋಗಿಸಿ ಇದನ್ನು ತೂಕ
ಮಾಡಲಾಯಿತು.)

25ಲೆಕ್ಕಿಸಲ್ಪಟ್ಟ ಒಟ್ಟು ಗಂಡಸರು ಮೂರುಮುಕ್ಕಾಲು
ಟನ್‌ಗಿಂತ ಹೆಚ್ಚು ಬೆಳ್ಳಿಯನ್ನು ಕೊಟ್ಟರು. (ಅಧಿಕೃತ
ಅಳತೆಯನ್ನು ಉಪಯೋಗಿಸಿ ಇದನ್ನು ತೂಕ ಮಾಡ
ಲಾಯಿತು.) 26ಇಪ್ಪತ್ತು ವರ್ಷ ಮತ್ತು ಅದಕ್ಕೆ ಮೇಲ್ಪಟ್ಟ
ಎಲ್ಲಾ ಗಂಡಸರನ್ನು ಲೆಕ್ಕಿಸಲಾಯಿತು. ಅಲ್ಲಿ ಆರು ಲಕ್ಷದ
ಮೂರು ಸಾವಿರದ ಐನೂರೈವತ್ತು ಮಂದಿ ಗಂಡಸರಿದ್ದರು
ಮತ್ತು ಪ್ರತಿಯೊಬ್ಬನು ತಲಾ ಒಂದು ಬೆಕಾ* ಬೆಳ್ಳಿಯನ್ನು
ತೆರಿಗೆಯಾಗಿ ಕೊಡಬೇಕಾಯಿತು. (ಅಧಿಕೃತ ಅಳತೆಯ
ಪ್ರಕಾರ ಒಂದು ಬೆಕಾ ಅಂದರೆ ಅರ್ಧ ಶೆಕೆಲ್.)
27ಯೆಹೋವನ ಪವಿತ್ರ ಸ್ಥಳ ಮತ್ತುಪರದೆಗಳಿಗೆ ಬೇಕಾದ
ನೂರು ಗದ್ದಿಗೇಕಲ್ಲುಗಳನ್ನು ಮಾಡಲು ಅವರು ಮೂರು
ಮುಕ್ಕಾಲು ಟನ್ ಬೆಳ್ಳಿಯನ್ನು ಉಪಯೋಗಿಸಿದರು.
ಅವರು ಪ್ರತಿ ಗದ್ದಿಗೇಕಲ್ಲಿಗೆ ಎಪ್ಪತ್ತೈದು ಪೌಂಡು ಬೆಳ್ಳಿ
ಯನ್ನು ಉಪಯೋಗಿಸಿದರು. 28ಉಳಿದ ಐವತ್ತು
ಪೌಂಡು ಬೆಳ್ಳಿಯನ್ನು ಕೊಂಡಿಗಳನ್ನೂ ಪರದೆಯ
ಕೋಲುಗಳನ್ನು ಮಾಡುವುದಕ್ಕೂ ಕಂಬಗಳಿಗೆ ಹೊದಿಸು
ವುದಕ್ಕೂ ಉಪಯೋಗಿಸಿದರು.

29ಇಪ್ಪತ್ತಾರುವರೆ ಟನ್‌ಗಿಂತ ಹೆಚ್ಚು ತಾಮ್ರವನ್ನು
ಯೆಹೋವನಿಗಾಗಿ ಕೊಡಲಾಯಿತು. 30ಆ ತಾಮ್ರವನ್ನು
ದೇವದರ್ಶನ ಗುಡಾರದ ಬಾಗಿಲಿನ ಗದ್ದಿಗೇಕಲ್ಲುಗಳನ್ನು
ಮಾಡಲು ಉಪಯೋಗಿಸಲಾಯಿತು. ಯಜ್ಞವೇದಿಕೆ
ಯನ್ನು ಮತ್ತು ತಾಮ್ರದ ಜಾಳಿಗೆಯನ್ನು ಮಾಡಲು
ಅವರು ತಾಮ್ರವನ್ನು ಉಪಯೋಗಿಸಿದರು. ಯಜ್ಞವೇದಿ
ಕೆಯ ಎಲ್ಲಾ ಉಪಕರಣಗಳನ್ನು ಮತ್ತು ಬಟ್ಟಲುಗಳನ್ನು
ಮಾಡಲು ತಾಮ್ರವನ್ನು ಉಪಯೋಗಿಸಲಾಯಿತು.
31ಅದನ್ನು ಅಂಗಳದ ಸುತ್ತಲಿರುವ ಪರದೆಗಳ ಮತ್ತು

**ಬೆಕಾ** 6 ಗ್ರಾಂ.

ಬಾಗಿಲಿನ ಪರದೆಗಳ ಗದ್ದಿಗೇಕಲ್ಲುಗಳಿಗೂ ಉಪಯೋಗಿ
ಸಲಾಯಿತು. ತಾಮ್ರವನ್ನು ಪವಿತ್ರ ಗುಡಾರದ ಮತ್ತು
ಅಂಗಳದ ಸುತ್ತಲಿರುವ ಪರದೆಗಳ ಗೂಟಗಳನ್ನು
ಮಾಡಲು ಉಪಯೋಗಿಸಲಾಯಿತು.

### ಯಾಜಕರ ವಿಶೇಷ ಬಟ್ಟೆಗಳು

39 ಯಾಜಕರು ಯೆಹೋವನ ಪವಿತ್ರ ಸ್ಥಳದಲ್ಲಿ
ಸೇವೆಮಾಡುವಾಗ ಧರಿಸಿಕೊಳ್ಳತಕ್ಕ ವಿಶೇಷ
ಬಟ್ಟೆಗಳನ್ನು ಮಾಡುವುದಕ್ಕೆ ಕೆಲಸಗಾರರು ನೀಲಿ, ನೇರಳೆ
ಕೆಂಪು ದಾರಗಳನ್ನು ಉಪಯೋಗಿಸಿದರು.
ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆ ಅವರು
ಆರೋನನಿಗೆ ವಿಶೇಷ ಬಟ್ಟೆಗಳನ್ನು ಮಾಡಿದರು.

### ಏಫೋದು

2ಅವರು ಏಫೋದನ್ನು ಚಿನ್ನದ ದಾರದಿಂದಲೂ ಶ್ರೇಷ್ಠ
ನಾರುಬಟ್ಟೆಯಿಂದಲೂ ನೀಲಿ, ನೇರಳೆ, ಕೆಂಪು ದಾರಗ
ಳಿಂದಲೂ ಮಾಡಿದರು. 3(ಅವರು ಚಿನ್ನವನ್ನು ಸುತ್ತಿಗೆ
ಯಿಂದ ಹೊಡೆದು ತೆಳುವಾದ ತಗಡುಗಳನ್ನು ಮಾಡಿ
ದರು. ಬಳಿಕ ಅವರು ಅದನ್ನು ಕತ್ತರಿಸಿ ಉದ್ದವಾದ ದಾರಗ
ಳನ್ನಾಗಿ ಮಾಡಿದರು. ಅವರು ಚಿನ್ನವನ್ನು ನೀಲಿ, ನೇರಳೆ,
ಕೆಂಪು ದಾರಗಳಿಗೂ ಮತ್ತು ಶ್ರೇಷ್ಠ ನಾರುಬಟ್ಟೆಗೂ ಹೆಣೆ
ದರು. ಇದು ಬಹಳ ನಿಪುಣನಾದ ಕೆಲಸಗಾರನು ಮಾಡಿದ
ಕೆಲಸವಾಗಿತ್ತು.) 4ಅವರು ಏಫೋದಿನ ಭುಜದ ಪಟ್ಟಿ
ಗಳನ್ನು ಮಾಡಿದರು. ಅವರು ಈ ಭುಜದ ಪಟ್ಟಿಗಳನ್ನು
ಏಫೋದಿನ ಎರಡು ಮೂಲೆಗಳಿಗೆ ಕಟ್ಟಿದರು. 5ಅವರು
ನಡುಕಟ್ಟನ್ನು ಹೆಣೆದು ಏಫೋದಿಗೆ ಬಿಗಿಯಾಗಿ ಕಟ್ಟಿ
ದರು. ಏಫೋದನ್ನು ಮಾಡಿದಂತೆಯೇ ಇದನ್ನು ಮಾಡ
ಲಾಯಿತು. ಯೆಹೋವನು ಮೋಶೆಗೆ ಆಜ್ಞಾಪಿಸಿ
ದಂತೆಯೇ ಅವರು ಇದನ್ನು ಮಾಡುವುದಕ್ಕೆ ಚಿನ್ನದ ದಾರ,
ಶ್ರೇಷ್ಠನಾರು ಬಟ್ಟೆಯನ್ನು ನೀಲಿ, ನೇರಳೆ, ಕೆಂಪು
ದಾರಗಳನ್ನು ಉಪಯೋಗಿಸಿದರು.

6ಕೆಲಸಗಾರರು ಗೋಮೇಧಿಕ ರತ್ನಗಳನ್ನು ಏಫೋದಿ
ನೊಳಗೆ ಚಿನ್ನದ ಕುಂದಣದಲ್ಲಿ ಇಟ್ಟರು. ಈ ರತ್ನಗಳಲ್ಲಿ
ಇಸ್ರೇಲನ ಪುತ್ರರ ಹೆಸರುಗಳನ್ನು ಬರೆದರು. 7ಬಳಿಕ
ಅವರು ಈ ರತ್ನಗಳನ್ನು ಏಫೋದಿನ ಭುಜದ ಪಟ್ಟಿಯಲ್ಲಿ
ಇಟ್ಟರು. ಇಸ್ರೇಲರನ್ನು ದೇವರ ಜ್ಞಾಪಕಕ್ಕೆ ತರುವಂತೆ ಈ
ರತ್ನಗಳು ಇಡಲ್ಪಟ್ಟವು. ಯೆಹೋವನು ಮೋಶೆಗೆ
ಆಜ್ಞಾಪಿಸಿದಂತೆಯೇ ಇದನ್ನು ಮಾಡಲಾಯಿತು.

### ದೈವನಿರ್ಣಯದ ಪದಕ

8ಬಳಿಕ ಅವರು ದೈವನಿರ್ಣಯ ಪದಕವನ್ನು ಮಾಡಿ
ದರು. ಏಫೋದಿನಂತೆಯೇ ಇದು ಸಹ ಬಟ್ಟೇದಾರಿಯ
ಕೆಲಸವಾಗಿತ್ತು. ಅದನ್ನು ಚಿನ್ನದದಾರಗಳಿಂದಲೂ ಶ್ರೇಷ್ಠ
ವಾದ ನಾರುಬಟ್ಟೆಯಿಂದಲೂ ನೀಲಿ, ನೇರಳೆ, ಕೆಂಪು
ದಾರಗಳಿಂದಲೂ ಮಾಡಲಾಯಿತು. 9ದೈವನಿರ್ಣಯದ
ಪದಕವನ್ನು ಅರ್ಧ ಮಡಚಿ ಚಚ್ಚೌಕವಾದ ಚೀಲವನ್ನಾಗಿ
ಮಾಡಲಾಗಿತ್ತು. ಅದು ಒಂಭತ್ತು ಇಂಚು ಉದ್ದ ಮತ್ತು
ಒಂಭತ್ತು ಇಂಚು ಅಗಲ ಇತ್ತು. 10ಬಳಿಕ ಕೆಲಸಗಾರರು
ಅಂದವಾದ ರತ್ನಗಳನ್ನು ನಾಲ್ಕು ಸಾಲುಗಳಾಗಿ ದೈವ
ನಿರ್ಣಯದ ಪದಕದಲ್ಲಿ ಇಟ್ಟರು. ಮೊದಲನೆಯ ಸಾಲಿ
ನಲ್ಲಿ ಮಾಣಿಕ್ಯ, ಪುಷ್ಪರಾಗ, ಸ್ಫಟಿಕಗಳು ಇದ್ದವು. 11ಎರಡ
ನೆಯ ಸಾಲಿನಲ್ಲಿ ಕೆಂಪರಲು, ನೀಲಪಚ್ಚೆಗಳು ಇದ್ದವು.
12ಮೂರನೆಯ ಸಾಲಿನಲ್ಲಿ ಸುವರ್ಣರತ್ನ ಗೋಮೇಧಿಕ
ಧೂಮ್ರಮಣಿಗಳು ಇದ್ದವು. 13ನಾಲ್ಕನೆಯ ಸಾಲಿನಲ್ಲಿ
ಪೀತರತ್ನ, ಬೆರುಲ್ಲ, ವೈಡೂರ್ಯಗಳು ಇದ್ದವು. ಈ ಎಲ್ಲಾ
ರತ್ನಗಳನ್ನು ಚಿನ್ನದ ಜವೆಯ ಕಲ್ಲಿಗಳಲ್ಲಿ ಇಟ್ಟರು.
14ಇಸ್ರೇಲನ (ಯಾಕೋಬ) ಗಂಡುಮಕ್ಕಳಲ್ಲಿ ಒಬ್ಬೊಬ್ಬ
ರಿಗೆ ಒಂದೊಂದು ರತ್ನದಂತೆ ದೈವನಿರ್ಣಯ ಪದಕದಲ್ಲಿ
ಹನ್ನೆರಡು ರತ್ನಗಳಿದ್ದವು. ಪ್ರತಿ ರತ್ನದಲ್ಲಿಯೂ ಇಸ್ರೇಲನ
ಗಂಡುಮಕ್ಕಳಲ್ಲಿ ಒಬ್ಬೊಬ್ಬನ ಹೆಸರು ಬರೆಯಲ್ಪಟ್ಟಿತ್ತು.
ಮುದ್ರಾರತ್ನವನ್ನು ಕೆತ್ತುವಂತೆ ಕಲ್ಲಿನಲ್ಲಿ ಹೆಸರುಗಳನ್ನು
ಕೆತ್ತಿದರು.

15ಅವರು ದೈವನಿರ್ಣಯಪದಕಕ್ಕೆ ಅಪ್ಪಟ ಬಂಗಾರದ
ಸರಪಣಿಗಳನ್ನು ಹುರಿಗಳಂತಿರುವ ಹಗ್ಗದಂತೆ ಮಾಡಿ
ದರು. 16ಕೆಲಸಗಾರರು ಎರಡು ಚಿನ್ನದ ಕುಂದಣಗಳನ್ನೂ
ಎರಡು ಚಿನ್ನದ ಉಂಗುರಗಳನ್ನೂ ಮಾಡಿದರು. ಅವರು
ಎರಡು ಚಿನ್ನದ ಉಂಗುರಗಳನ್ನು ದೈವನಿರ್ಣಯಪದಕದ
ಎರಡು ಕೊನೆಗಳಲ್ಲಿ ಇರಿಸಿದರು. 17ಬಳಿಕ ಅವರು ದೈವ
ನಿರ್ಣಯಪದಕದ ಕೊನೆಗಳಲ್ಲಿರುವ ಉಂಗುರಗಳಿಗೆ
ಎರಡು ಚಿನ್ನದ ಸರಪಣಿಗಳನ್ನು ಸಿಕ್ಕಿಸಿದರು. 18ಅವರು
ಚಿನ್ನದ ಸರಪಣಿಗಳ ಇನ್ನೆರಡು ಕೊನೆಗಳನ್ನು ಎರಡು
ಕುಂದಣಗಳಿಗೆ ಕಟ್ಟಿದರು. ಇದು ಅವುಗಳನ್ನು ಏಫೋದಿನ
ಎರಡು ಭುಜದ ಪಟ್ಟಿಗಳಿಗೆ ಮುಂಭಾಗದಲ್ಲಿ ಬಿಗಿಯಾಗಿ
ಹಿಡಿದುಕೊಂಡಿತು. 19ಬಳಿಕ ಅವರು ಇನ್ನೆರಡು ಚಿನ್ನದ
ಉಂಗುರಗಳನ್ನು ಮಾಡಿ, ದೈವನಿರ್ಣಯ ಪದಕದ
ಇನ್ನೆರಡು ಕೊನೆಗಳಿಗೆ ಸಿಕ್ಕಿಸಿದರು. ಅವರು ಉಂಗುರ
ಗಳನ್ನು ಏಫೋದಿನ ಹತ್ತಿರವಿರುವ ದೈವನಿರ್ಣಯ ಪದ
ಕದ ಒಳಗಿನ ಅಂಚಿನಲ್ಲಿ ಇರಿಸಿದರು. 20ಅವರು ಎರಡು
ಚಿನ್ನದ ಉಂಗುರಗಳನ್ನು ಏಫೋದಿನ ಮುಂಭಾಗದಲ್ಲಿ
ಭುಜದ ಪಟ್ಟಿಗಳ ಕೆಳಭಾಗದಲ್ಲಿ ಇರಿಸಿದರು. ಈ ಉಂಗು
ರಳು ನಡುಕಟ್ಟಿನ ಮೇಲ್ಗಡೆಯಲ್ಲಿರುವ ಕಟ್ಟಿನ ಹತ್ತಿರ
ಇದ್ದವು. 21ಬಳಿಕ ಅವರು ನೀಲಿ ದಾರದಿಂದ ದೈವ
ನಿರ್ಣಯ ಪದಕದ ಉಂಗುರಗಳನ್ನು ಏಫೋದಿನ
ಉಂಗುರಗಳಿಗೆ ಕಟ್ಟಿದರು. ಈ ರೀತಿಯಾಗಿ ದೈವ

ನಿರ್ಣಯ ಪದಕವು ನಡುಕಟ್ಟಿಗೆ ಹತ್ತಿರವಾಗಿದ್ದು ಏಫೋ
ದಿಗೆ ಬಿಗಿಯಾಗಿ ಅಂಟಿಕೊಂಡಿತ್ತು. ಯೆಹೋವನು
ಆಜ್ಞಾಪಿಸಿದಂತೆಯೇ ಅವರು ಎಲ್ಲವನ್ನೂ ಮಾಡಿದರು.

**ಯಾಜಕರಿಗೆ ಇತರ ಬಟ್ಟೆಗಳು**

22ಬಳಿಕ ಅವರು ಏಫೋದಿನೊಂದಿಗೆ ತೊಟ್ಟು
ಕೊಳ್ಳಬೇಕಾದ ನಿಲುವಂಗಿಯನ್ನು ಮಾಡಿದರು. ಅದು
ನಿಪುಣವಾದ ಕೆಲಸಗಾರನಿಂದ ಹೆಣೆಯಲ್ಪಟ್ಟಿತ್ತು. ಅವರು
ಅದನ್ನು ನೀಲಿ ಬಟ್ಟೆಯಿಂದ ಮಾಡಿದರು. 23ಅವರು ನಿಲು
ವಂಗಿಯ ಮಧ್ಯದಲ್ಲಿ ಒಂದು ಸಂದನ್ನು ಮಾಡಿ ಆ ಸಂದಿನ
ಅಂಚಿನ ಸುತ್ತಲೂ ಬಟ್ಟೆಯನ್ನಿಟ್ಟು ಹೊಲಿದರು. ಈ
ಬಟ್ಟೆಯು ಸಂದು ಹರಿದುಹೋಗದಂತೆ ಮಾಡಿತು.

24ತರುವಾಯ ಅವರು ಬಟ್ಟೆಯ ದಾಳಿಂಬೆ ಹಣ್ಣಿನ
ಚೆಂಡುಗಳನ್ನು ಮಾಡಲು ಶ್ರೇಷ್ಠ ನಾರುಬಟ್ಟೆಯನ್ನು
ನೀಲಿ, ನೇರಳೆ, ಕೆಂಪು ದಾರಗಳನ್ನು ಉಪಯೋಗಿಸಿದರು.
ಅವರು ಈ ದಾಳಿಂಬೆ ಹಣ್ಣಿನಂತಿರುವ ಚೆಂಡುಗಳನ್ನು
ನಿಲುವಂಗಿಯ ಕೆಳಅಂಚಿನಲ್ಲಿ ತೂಗುಹಾಕಿದರು.
25ಬಳಿಕ ಅವರು ಅಪ್ಪಟ ಬಂಗಾರದ ಗೆಜ್ಜೆಗಳನ್ನು ಮಾಡಿ
ದರು. ಅವರು ಈ ಗೆಜ್ಜೆಗಳನ್ನು ನಿಲುವಂಗಿಯ ಕೆಳಅಂಚಿನ
ಸುತ್ತಲೂ ದಾಳಿಂಬೆಹಣ್ಣುಗಳ ನಡುವೆ ತೂಗುಹಾಕಿದರು.
26ಹೀಗೆ ನಿಲುವಂಗಿಯ ಕೆಳಅಂಚಿನ ಸುತ್ತಲೆಲ್ಲ ದಾಳಿಂಬೆ
ಹಣ್ಣುಗಳೂ, ಗೆಜ್ಜೆಗಳೂ, ಇದ್ದವು. ಪ್ರತಿ ದಾಳಿಂಬೆಹಣ್ಣಿನ
ನಡುವೆ ಒಂದೊಂದು ಗೆಜ್ಜೆ ಇತ್ತು. ಯೆಹೋವನು
ಮೋಶೆಗೆ ಆಜ್ಞಾಪಿಸಿದಂತೆಯೇ ಯಾಜಕರು ಯೆಹೋ
ವನ ಸೇವೆ ಮಾಡುವಾಗ ಧರಿಸಿಕೊಳ್ಳತಕ್ಕ ನಿಲುವಂಗಿ
ಇದಾಗಿತ್ತು.

27ನಿಪುಣರಾದ ಕೆಲಸಗಾರರು ಆರೋನನಿಗೂ ಅವನ
ಮಕ್ಕಳಿಗೂ ಅಂಗಿಗಳನ್ನು ಹೊಲಿದರು. ಈ ಅಂಗಿಗಳು
ಶ್ರೇಷ್ಠವಾದ ನಾರುಬಟ್ಟೆಯಿಂದ ಮಾಡಲ್ಪಟ್ಟವು.
28ಶ್ರೇಷ್ಠವಾದ ನಾರುಬಟ್ಟೆಯಿಂದ ಕೆಲಸಗಾರರು ಒಂದು
ಮುಂಡಾಸವನ್ನು ಮಾಡಿದರು. ಅವರು ತಲೆಪಟ್ಟಿಗಳನ್ನು
ಮತ್ತು ಒಳಅಂಗಿಗಳನ್ನು ಮಾಡುವುದಕ್ಕೆ ಶ್ರೇಷ್ಠವಾದ
ನಾರುಬಟ್ಟೆಯನ್ನು ಉಪಯೋಗಿಸಿದರು. 29ಬಳಿಕ
ಅವರು ಶ್ರೇಷ್ಠವಾದ ನಾರುಬಟ್ಟೆಯಿಂದಲೂ ಮತ್ತು
ನೀಲಿ, ನೇರಳೆ, ಕೆಂಪು ದಾರಗಳಿಂದಲೂ ನಡುಕಟ್ಟನ್ನು
ಮಾಡಿದರು. ಈ ಬಟ್ಟೆಗೆ ಕಸೂತಿ ಹಾಕಲಾಯಿತು.
ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆಯೇ ಈ ವಸ್ತು
ಗಳನ್ನು ಮಾಡಲಾಯಿತು.

30ತರುವಾಯ ಅವರು ಪವಿತ್ರಕಿರೀಟವನ್ನೂ ಅಪ್ಪಟ
ಬಂಗಾರದಿಂದ ಮಾಡಿದರು. ಅವರು ಬಂಗಾರದಲ್ಲಿ
ಅಕ್ಷರಗಳನ್ನು ಕೆತ್ತಿದರು. ಅವರು, ‘‘ಯೆಹೋವನಿಗೆ
ಪವಿತ್ರವಾದದ್ದು’’ ಎಂಬ ಮಾತುಗಳನ್ನು ಬರೆದರು.
31ಅವರು ಚಿನ್ನದ ಪಟ್ಟಿಯನ್ನು ದಾರಕ್ಕೆ ಬಿಗಿದರು.
ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆಯೇ ಅವರು
ಈ ನೀಲಿ ದಾರವನ್ನು ಮುಂಡಾಸಕ್ಕೆ ಕಟ್ಟಿದರು.

**ಮೋಶೆಯು ಪವಿತ್ರಗುಡಾರವನ್ನು ಪರೀಕ್ಷಿಸಿದ್ದು**

32ಹೀಗೆ ಪವಿತ್ರಗುಡಾರವಾದ ದೇವದರ್ಶನ ಗುಡಾ
ರದ ಕೆಲಸವೆಲ್ಲವೂ ಮುಗಿಯಿತು. ಯೆಹೋವನು
ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರೇಲರು ಪ್ರತಿ
ಯೊಂದನ್ನೂ ಮಾಡಿದರು. 33ಬಳಿಕ ಅವರು ಪವಿತ್ರ
ಗುಡಾರವನ್ನು ಮೋಶೆಗೆ ತೋರಿಸಿದರು. ಅವರು
ಗುಡಾರವನ್ನೂ ಅದರಲ್ಲಿರುವ ವಸ್ತುಗಳನ್ನೆಲ್ಲಾ ಅವನಿಗೆ
ತೋರಿಸಿದರು. ಬಳೆಗಳು, ಚೌಕಟ್ಟುಗಳು, ಅಗುಳಿಗಳು,
ಕಂಬಗಳು, ಗದ್ದಿಗೇಕಲ್ಲುಗಳನ್ನೆಲ್ಲಾ ಅವನಿಗೆ ತೋರಿಸಿ
ದರು. 34ಅವರು ಕೆಂಪು ಬಣ್ಣದ ಕುರಿತೊಗಲಿನಿಂದ
ಮಾಡಿದ ಗುಡಾರದ ಮೇಲ್ಹೊದಿಕೆಯನ್ನು ಅವನಿಗೆ
ತೋರಿಸಿದರು; ಶ್ರೇಷ್ಠವಾದ ತೊಗಲಿನಿಂದ ಮಾಡಿದ
ಹೊದಿಕೆಯನ್ನೂ ಅವನಿಗೆ ತೋರಿಸಿದರು. ಮಹಾ ಪವಿತ್ರ
ಸ್ಥಳವನ್ನು ಮುಚ್ಚುವ ಪರದೆಯನ್ನೂ ಅವನಿಗೆ
ತೋರಿಸಿದರು.

35ಅವರು ಮೋಶೆಗೆ ಒಡಂಬಡಿಕೆಯ ಪೆಟ್ಟಿಗೆಯನ್ನೂ
ಆ ಪೆಟ್ಟಗೆಯನ್ನು ಹೊರುವುದಕ್ಕಾಗಿ ಉಪಯೋಗಿಸುವ
ಕೋಲುಗಳನ್ನೂ ಪೆಟ್ಟಿಗೆಯ ಕೃಪಾಸನವನ್ನೂ ಮೋಶೆಗೆ
ತೋರಿಸಿದರು. 36ಅವರು ಮೇಜನ್ನೂ ಅದರಲ್ಲಿರುವ
ಪ್ರತಿಯೊಂದನ್ನೂ ನೈವೇದ್ಯದ ರೊಟ್ಟಿಯನ್ನೂ ಅವನಿಗೆ
ತೋರಿಸಿದರು. 37ಅವರು ಅಪ್ಪಟ ಬಂಗಾರದ ದೀಪ
ಸ್ತಂಭವನ್ನೂ ಅದರಲ್ಲಿರುವ ಹಣತೆಗಳನ್ನೂ ಎಣ್ಣೆಯನ್ನೂ
ಹಣತೆಗಳೊಂದಿಗೆ ಉಪಯೋಗಿಸುವ ಇತರ ವಸ್ತು
ಗಳನ್ನೂ ತೋರಿಸಿದರು. 38ಅವರು ಚಿನ್ನದ ವೇದಿಕೆ
ಯನ್ನೂ ಅಭಿಷೇಕತೈಲವನ್ನೂ ಪರಿಮಳ ಧೂಪವನ್ನೂ
ಗುಡಾರದ ಪ್ರವೇಶದಲ್ಲಿರುವ ಪರದೆಯನ್ನೂ ಮೋಶೆಗೆ
ತೋರಿಸಿದರು. 39ಅವರು ಅವನಿಗೆ ತಾಮ್ರದ ವೇದಿಕೆ
ಯನ್ನೂ ತಾಮ್ರದ ಜಾಳಿಗೆಯನ್ನೂ ವೇದಿಕೆಯನ್ನು
ಹೊರುವುದಕ್ಕೆ ಉಪಯೋಗಿಸುವ ಕೋಲುಗಳನ್ನೂ
ವೇದಿಕೆಯ ಎಲ್ಲಾ ಉಪಕರಣಗಳನ್ನೂ ಗಂಗಾಳವನ್ನೂ
ಮತ್ತು ಅದರ ಕೆಳಗಿರುವ ಗದ್ದಿಗೇಕಲ್ಲನ್ನು ಅವನಿಗೆ
ತೋರಿಸಿದರು.

40ಅವರು ಅಂಗಳದ ಸುತ್ತಲಿರುವ ಪರದೆಗಳ ಗೋಡೆ
ಯನ್ನೂ ಅದರ ಕಂಬಗಳನ್ನೂ ಗದ್ದಿಗೇಕಲ್ಲುಗಳನ್ನೂ
ಅಂಗಳದ ಪ್ರವೇಶವನ್ನು ಮುಚ್ಚುವ ಪರದೆಯನ್ನೂ ಹಗ್ಗ
ಗಳನ್ನೂ ಗುಡಾರದ ಗೂಟಗಳನ್ನೂ ದೇವದರ್ಶನದ
ಪವಿತ್ರ ಗುಡಾರದ ಎಲ್ಲಾ ವಸ್ತುಗಳನ್ನೂ ಅವನಿಗೆ
ತೋರಿಸಿದರು.

[41]ತರುವಾಯ ಮೋಶೆಗೆ ಪವಿತ್ರ ಸ್ಥಳದಲ್ಲಿ ಸೇವೆ ಮಾಡುವುದಕ್ಕೆ ಯಾಜಕರಿಗಾಗಿ ಮಾಡಿದ ಬಟ್ಟೆಗಳನ್ನು ಅಂದರೆ ಯಾಜಕನಾದ ಆರೋನನಿಗೆ ಮತ್ತು ಅವನ ಮಕ್ಕಳಿಗಾಗಿ ಮಾಡಿದ ವಿಶೇಷ ಬಟ್ಟೆಗಳನ್ನು ಅವರು ತೋರಿಸಿದರು. ಅವರು ಯಾಜಕರಾಗಿ ಸೇವೆ ಮಾಡುವಾಗ ಧರಿಸಿಕೊಳ್ಳತಕ್ಕ ಬಟ್ಟೆಗಳು ಇವುಗಳೇ.

[42]ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರೇಲರು ಇವುಗಳನ್ನೆಲ್ಲಾ ಮಾಡಿದರು. [43]ಮೋಶೆಯು ಎಲ್ಲಾ ಕೆಲಸವನ್ನು ಸೂಕ್ಷ್ಮವಾಗಿ ಪರೀಕ್ಷಿಸಿದನು. ಯೆಹೋವನು ಆಜ್ಞಾಪಿಸಿದಂತೆಯೇ ಎಲ್ಲವೂ ಮಾಡಲ್ಪಟ್ಟಿದ್ದರಿಂದ ಮೋಶೆ ಅವರನ್ನು ಆಶೀರ್ವದಿಸಿದನು.

## ಪವಿತ್ರಗುಡಾರದ ಸ್ಥಾಪನೆ

40 ತರುವಾಯ ಯೆಹೋವನು ಮೋಶೆಗೆ [2]“ಮೊದಲನೆಯ ತಿಂಗಳಿನ ಮೊದಲನೆಯ ದಿನದಲ್ಲಿ ದೇವದರ್ಶನಗುಡಾರವಾದ ಪವಿತ್ರ ಗುಡಾರವನ್ನು ಎತ್ತಿ ನಿಲ್ಲಿಸು. [3]ಪವಿತ್ರಗುಡಾರದಲ್ಲಿ ಒಡಂಬಡಿಕೆಯ ಪೆಟ್ಟಿಗೆಯನ್ನು ಇಡು. ಪೆಟ್ಟಿಗೆಯನ್ನು ಪರದೆಯಿಂದ ಮುಚ್ಚಿಸು. [4]ಬಳಿಕ ಮೇಜನ್ನು ಒಳಗೆ ತರಿಸಿ ಮೇಜಿನ ಮೇಲಿರಬೇಕಾದ ವಸ್ತುಗಳನ್ನು ಅದರ ಮೇಲಿರಿಸು. ದೀಪಸ್ತಂಭವನ್ನು ಗುಡಾರದಲ್ಲಿ ಇರಿಸು. ದೀಪಸ್ತಂಭದಲ್ಲಿ ಸರಿಯಾದ ಜಾಗಗಳಲ್ಲಿ ಹಣತೆಗಳನ್ನು ಇರಿಸು. [5]ಗುಡಾರದೊಳಗೆ ಧೂಪವನ್ನು ಅರ್ಪಿಸಲು ಬಂಗಾರದ ವೇದಿಕೆಯನ್ನು ಇಡು. ವೇದಿಕೆಯನ್ನು ಒಡಂಬಡಿಕೆಯ ಪೆಟ್ಟಿಗೆಯ ಮುಂದಿರಿಸು. ಬಳಿಕ ಪವಿತ್ರಗುಡಾರದ ಪ್ರವೇಶದಲ್ಲಿ ಪರದೆಯನ್ನು ಇರಿಸು.

[6]“ದೇವದರ್ಶನಗುಡಾರವಾದ ಪವಿತ್ರಗುಡಾರದ ಪ್ರವೇಶದ್ವಾರದ ಮುಂದೆ ಯಜ್ಞವೇದಿಕೆಯನ್ನು ಇರಿಸು. [7]ಗಂಗಾಳವನ್ನು ದೇವದರ್ಶನಗುಡಾರ ಮತ್ತು ವೇದಿಕೆಯ ನಡುವೆ ಇರಿಸು. ಗಂಗಾಳದಲ್ಲಿ ನೀರನ್ನು ಹಾಕಿಸು. [8]ಅಂಗಳದ ಸುತ್ತಲೂ ಪರದೆಗಳ ಗೋಡೆಯನ್ನು ನಿಲ್ಲಿಸು. ಬಳಿಕ ಅಂಗಳದ ಬಾಗಿಲಿಗೆ ಪರದೆಯನ್ನು ಹಾಕಿಸು.

[9]“ಅಭಿಷೇಕತೈಲವನ್ನು ಉಪಯೋಗಿಸಿ ಪವಿತ್ರ ಗುಡಾರವನ್ನೂ ಅದರಲ್ಲಿರುವ ಪ್ರತಿಯೊಂದನ್ನೂ ಅಭಿಷೇಕಿಸು. ನೀನು ತೈಲವನ್ನು ಈ ವಸ್ತುಗಳ ಮೇಲೆ ಹಾಕುವಾಗ, ಅವುಗಳನ್ನು ಪವಿತ್ರಗೊಳಿಸುವೆ. [10]ಯಜ್ಞವೇದಿಕೆಯನ್ನು ಅಭಿಷೇಕಿಸು. ವೇದಿಕೆಯ ಮೇಲಿರುವ ಪ್ರತಿಯೊಂದನ್ನು ಅಭಿಷೇಕಿಸಿ ಪ್ರತಿಷ್ಠಿಸು. ಆಗ ಅದು ಬಹುಪವಿತ್ರವಾಗುವುದು. [11]ಬಳಿಕ ಗಂಗಾಳವನ್ನೂ ಅದರ ಕೆಳಗಿರುವ ಪೀಠವನ್ನೂ ಅಭಿಷೇಕಿಸಿ ಪವಿತ್ರಗೊಳಿಸು.

[12]“ಆರೋನನನ್ನೂ ಅವನ ಪುತ್ರರನ್ನೂ ದೇವದರ್ಶನಗುಡಾರದ ಬಾಗಿಲಿಗೆ ಕರೆಸು. ಅವರಿಗೆ ನೀರಿನಿಂದ ಸ್ನಾನ ಮಾಡಿಸು. [13]ಬಳಿಕ ಆರೋನನಿಗೆ ವಿಶೇಷ ಬಟ್ಟೆಯನ್ನು ತೊಡಿಸು. ತೈಲದಿಂದ ಅವನನ್ನೂ ಅಭಿಷೇಕಿಸಿ ಪವಿತ್ರಗೊಳಿಸು. ಆಗ ಅವನು ಯಾಜಕನಾಗಿ ನನ್ನ ಸೇವೆ ಮಾಡಬಹುದು. [14]ಬಳಿಕ ಅವನ ಪುತ್ರರಿಗೆ ಬಟ್ಟೆಗಳನ್ನು ತೊಡಿಸು. [15]ಅವರ ತಂದೆಯನ್ನು ಅಭಿಷೇಕಿಸಿದಂತೆ ಪುತ್ರರನ್ನೂ ಅಭಿಷೇಕಿಸು. ಆಗ ಅವರು ಯಾಜಕರಾಗಿ ತಲೆತಲೆಮಾರುಗಳವರೆಗೆ ನನ್ನ ಸೇವೆ ಮಾಡಬಹುದು. ನೀನು ಅವರನ್ನು ಅಭಿಷೇಕಿಸಿದಾಗ, ಅವರು ಯಾಜಕರಾಗುವರು. ಇನ್ನು ಮುಂದೆ ಆ ಕುಟುಂಬವು ಯಾಜಕರಾಗಿ ಮುಂದುವರಿಯುವುದು” ಎಂದು ಹೇಳಿದನು.
[16]ಯೆಹೋವನು ಆಜ್ಞಾಪಿಸಿದಂತೆಯೇ ಪ್ರತಿಯೊಂದನ್ನೂ ಮೋಶೆಯು ಮಾಡಿದನು.

[17]ಆದ್ದರಿಂದ ಪವಿತ್ರಗುಡಾರವು ಅವರು ಈಜಿಪ್ಟನ್ನು ಬಿಟ್ಟಕಾಲದಿಂದ ಎರಡನೆಯ ವರ್ಷದ ಮೊದಲನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಸ್ಥಾಪಿಸಲ್ಪಟ್ಟಿತು.
[18]ಯೆಹೋವನು ಹೇಳಿದಂತೆಯೇ ಮೋಶೆಯು ಪವಿತ್ರ ಗುಡಾರವನ್ನು ನಿಲ್ಲಿಸಿದನು. ಅವನು ಮೊದಲು ಗದ್ದಿಗೇಕಲ್ಲುಗಳನ್ನು ಕೆಳಗೆ ಇರಿಸಿದನು. ಬಳಿಕ ಅವನು ಗದ್ದಿಗೇಕಲ್ಲುಗಳ ಮೇಲೆ ಚೌಕಟ್ಟುಗಳನ್ನು ಇರಿಸಿದನು. ಬಳಿಕ ಅವನು ಅಗುಳಿಗಳನ್ನಿರಿಸಿ ಕಂಬಗಳನ್ನು ನಿಲ್ಲಿಸಿದನು.
[19]ನಂತರ, ಮೋಶೆಯು ಪವಿತ್ರಗುಡಾರದ ಮೇಲೆ ಹೊರಗಣ ಡೇರೆಯನ್ನು ಹಾಕಿಸಿದನು. ಬಳಿಕ ಅವನು ಹೊರಗಿನ ಡೇರೆಗೆ ಹೊದಿಕೆಯನ್ನು ಹಾಕಿಸಿದನು. ಯೆಹೋವನು ಆಜ್ಞಾಪಿಸಿದಂತೆಯೇ ಅವನು ಈ ಕಾರ್ಯಗಳನ್ನು ಮಾಡಿದನು.

[20]ಮೋಶೆಯು ಒಡಂಬಡಿಕೆಯ ಆಜ್ಞಾಶಾಸನಗಳನ್ನು ತೆಗೆದುಕೊಂಡು ಪವಿತ್ರ ಪೆಟ್ಟಿಗೆಯಲ್ಲಿಟ್ಟನು. ಮೋಶೆಯು ಪೆಟ್ಟಿಗೆಯ ಎರಡು ಕಡೆಗಳಲ್ಲಿ ಕೋಲುಗಳನ್ನು ಇರಿಸಿದನು. ಬಳಿಕ ಅವನು ಪೆಟ್ಟಿಗೆಯ ಮೇಲೆ ಕೃಪಾಸನವನ್ನು ಇಟ್ಟನು. [21]ಬಳಿಕ ಮೋಶೆಯು ಪವಿತ್ರ ಪೆಟ್ಟಿಗೆಯನ್ನು ಪವಿತ್ರಗುಡಾರದೊಳಗೆ ತಂದನು. ಅದನ್ನು ಸಂರಕ್ಷಿಸುವುದಕ್ಕಾಗಿ ಸರಿಯಾದ ಸ್ಥಳದಲ್ಲಿ ಪರದೆಯನ್ನು ತೂಗುಹಾಕಿದನು. ಹೀಗೆ ಒಡಂಬಡಿಕೆ ಪೆಟ್ಟಿಗೆಯನ್ನು ಪರದೆಯ ಹಿಂಭಾಗದಲ್ಲಿರಿಸಿ ಸಂರಕ್ಷಿಸಿದನು. ಯೆಹೋವನು ಆಜ್ಞಾಪಿಸಿದಂತೆಯೇ ಇದನ್ನು ಮಾಡಿದನು. [22]ತರುವಾಯ ಮೋಶೆಯು ದೇವದರ್ಶನಗುಡಾರದಲ್ಲಿ ಮೇಜನ್ನು ಇರಿಸಿದನು. ಪವಿತ್ರ ಗುಡಾರದ ಉತ್ತರಭಾಗದಲ್ಲಿ ಅದನ್ನು ಇರಿಸಿದನು. ಅವನು ಅದನ್ನು (ಪವಿತ್ರಸ್ಥಳದಲ್ಲಿ) ಪರದೆಯ ಮುಂಭಾಗದಲ್ಲಿ ಇರಿಸಿದನು. [23]ಬಳಿಕ ಅವನು ಯೆಹೋವನ ಸನ್ನಿಧಿಯಲ್ಲಿ ಮೇಜಿನ ಮೇಲೆ ನೈವೇದ್ಯದ ರೊಟ್ಟಿಯನ್ನಿರಿಸಿದನು. ಯೆಹೋವನು ಆಜ್ಞಾಪಿಸಿದಂತೆಯೇ ಅವನು ಇದನ್ನು ಮಾಡಿದನು. [24]ಬಳಿಕ

ಮೋಶೆಯು ದೀಪಸ್ತಂಭವನ್ನು ಪವಿತ್ರಗುಡಾರದೊಳಗೆ
ಇರಿಸಿದನು. ಮೇಜಿಗೆ ಎದುರಾಗಿ ಗುಡಾರದ ದಕ್ಷಿಣ
ಭಾಗದಲ್ಲಿ ದೀಪಸ್ತಂಭವನ್ನಿರಿಸಿದನು. 25ತರುವಾಯ
ಮೋಶೆಯು ಯೆಹೋವನ ಮುಂದಿರುವ ದೀಪಸ್ತಂಭ
ದಲ್ಲಿ ಹಣತೆಗಳನ್ನು ಇರಿಸಿದನು. ಯೆಹೋವನು ಆಜ್ಞಾ
ಪಿಸಿದಂತೆಯೇ ಅವನು ಇದನ್ನು ಮಾಡಿದನು.

26ಬಳಿಕ ಮೋಶೆಯು ಚಿನ್ನದ ವೇದಿಕೆಯನ್ನು ದೇವ
ದರ್ಶನ ಗುಡಾರದೊಳಗೆ ಇರಿಸಿದನು. ಅವನು ವೇದಿಕೆ
ಯನ್ನು ಪರದೆಯ ಮುಂಭಾಗದಲ್ಲಿ ಇರಿಸಿದನು. 27ಬಳಿಕ
ಅವನು ವೇದಿಕೆಯ ಮೇಲೆ ಸುಗಂಧವಾಸನೆಯುಳ್ಳ ಧೂಪ
ವನ್ನು ಉರಿಸಿದನು. ಯೆಹೋವನು ಅವನಿಗೆ ಆಜ್ಞಾಪಿಸಿ
ದಂತೆಯೇ ಇದನ್ನು ಮಾಡಿದನು. 28ಬಳಿಕ ಮೋಶೆಯು
ಪವಿತ್ರಗುಡಾರದ ಬಾಗಿಲಿಗೆ ಪರದೆಯನ್ನು ಹಾಕಿಸಿದನು.

29ಪವಿತ್ರಗುಡಾರದ ಪ್ರವೇಶದ್ವಾರದ ಬಳಿಯಲ್ಲಿ
ಯಜ್ಞವೇದಿಕೆಯನ್ನು ಇರಿಸಿದನು. ಅವನು ಯೆಹೋವನಿ
ಗಾಗಿ ಆ ವೇದಿಕೆಯ ಮೇಲೆ ಸರ್ವಾಂಗಹೋಮವನ್ನೂ
ಧಾನ್ಯಸಮರ್ಪಣೆಯನ್ನೂ ಮಾಡಿದನು. ಯೆಹೋವನು
ಆಜ್ಞಾಪಿಸಿದಂತೆ ಅವನು ಇದನ್ನು ಮಾಡಿದನು.

30ತರುವಾಯ ಮೋಶೆಯು ಗಂಗಾಳವನ್ನು ದೇವ
ದರ್ಶನಗುಡಾರ ಮತ್ತು ವೇದಿಕೆಯ ನಡುವೆ ಇಟ್ಟನು.
ತೊಳೆದುಕೊಳ್ಳುವುದಕ್ಕಾಗಿ ನೀರನ್ನು ಗಂಗಾಳದಲ್ಲಿ
ಹಾಕಿಸಿದನು. 31ಮೋಶೆ ಆರೋನ ಮತ್ತು ಆರೋನನ
ಪುತ್ರರು ತಮ್ಮ ಕೈಕಾಲುಗಳನ್ನು ತೊಳೆದುಕೊಳ್ಳುವುದ
ಕ್ಕಾಗಿ ಈ ಗಂಗಾಳವನ್ನು ಉಪಯೋಗಿಸಿದರು. 32ಅವರು
ದೇವದರ್ಶನ ಗುಡಾರವನ್ನು ಪ್ರವೇಶಿಸುವಾಗಲೆಲ್ಲಾ
ಮತ್ತು ಯಜ್ಞವೇದಿಕೆಯ ಸಮೀಪ ಹೋಗುವಾಗಲೆಲ್ಲಾ
ತಮ್ಮನ್ನು ತೊಳೆದು ಕೊಳ್ಳುತ್ತಿದ್ದರು. ಯೆಹೋವನು
ಮೋಶೆಗೆ ಆಜ್ಞಾಪಿಸಿದಂತೆಯೇ ಅವರು ಇದನ್ನು
ಮಾಡಿದರು.

33ತರುವಾಯ ಮೋಶೆಯು ಪವಿತ್ರಗುಡಾರದ ಅಂಗ
ಳದ ಸುತ್ತಲೂ ಪರದೆಗಳನ್ನು ನಿಲ್ಲಿಸಿದನು. ಮೋಶೆಯು
ವೇದಿಕೆಯನ್ನು ಅಂಗಳದಲ್ಲಿರಿಸಿದನು. ಬಳಿಕ ಅವನು
ಅಂಗಳದ ಬಾಗಿಲಿಗೆ ಪರದೆಯನ್ನು ಹಾಕಿಸಿದನು. ಹೀಗೆ
ಮೋಶೆಯು ಯೆಹೋವನು ತನಗೆ ಕೊಟ್ಟ ಎಲ್ಲಾ ಕೆಲಸ
ವನ್ನು ಮಾಡಿ ಮುಗಿಸಿದನು.

### ಯೆಹೋವನ ಮಹಿಮೆ

34ತರುವಾಯ ಮೋಡವು ದೇವದರ್ಶನಗುಡಾರವನ್ನು
ಕವಿಯಿತು. ಯೆಹೋವನ ಮಹಿಮೆಯು ಪವಿತ್ರಗುಡಾರ
ವನ್ನು ತುಂಬಿಕೊಂಡಿತು. 35ಮೋಡವು ದೇವದರ್ಶನ
ಗುಡಾರದ ಮೇಲೆ ನಿಂತಿತು. ಯೆಹೋವನ ಮಹಿ
ಮೆಯು ಪವಿತ್ರಗುಡಾರವನ್ನು ತುಂಬಿಕೊಂಡಿದ್ದರಿಂದ
ಮೋಶೆಯು ಒಳಗೆ ಪ್ರವೇಶಿಸಲಾಗಲಿಲ್ಲ.

36ಜನರು ಯಾವಾಗ ಚಲಿಸಬೇಕೆಂದು ಮೋಡವು
ತೋರಿಸುತ್ತಿತ್ತು. ಮೋಡವು ಪವಿತ್ರಗುಡಾರವನ್ನು ಬಿಟ್ಟು
ಮೇಲೆದ್ದಾಗ, ಜನರು ಪ್ರಯಾಣ ಮಾಡತೊಡಗು
ತ್ತಿದ್ದರು. 37ಆದರೆ ಮೋಡವು ಪವಿತ್ರಗುಡಾರದ ಮೇಲಿ
ದ್ದಾಗ ಜನರು ಪ್ರಯಾಣ ಮಾಡುತ್ತಿರಲಿಲ್ಲ. ಮೋಡವು
ಮೇಲೇಳುವವರೆಗೆ ಅವರು ಅಲ್ಲೇ ಇರುತ್ತಿದ್ದರು. 38ಹೀಗೆ
ಯೆಹೋವನ ಮೋಡವು ಹಗಲಿನಲ್ಲಿ ಪವಿತ್ರಗುಡಾರದ
ಮೇಲೆ ನಿಂತಿತು. ರಾತ್ರಿಯಲ್ಲಿ ಮೋಡದಲ್ಲಿ ಅಗ್ನಿಯು
ಪ್ರಕಾಶಿಸುತ್ತಿತ್ತು. ಆದ್ದರಿಂದ ಇಸ್ರೇಲ್ ಜನರೆಲ್ಲರೂ
ತಾವು ಪ್ರಯಾಣ ಮಾಡುವಾಗ, ಮೋಡವನ್ನು ನೋಡ
ಬಹುದಾಗಿತ್ತು.

# ಯಾಜಕಕಾಂಡ

## ಯಜ್ಞಗಳು ಮತ್ತು ಕಾಣಿಕೆಗಳು

1 ಯೆಹೋವನು ಮೋಶೆಯನ್ನು ಕರೆದು ದೇವ
ದರ್ಶನ ಗುಡಾರದೊಳಗಿಂದ ಅವನ ಸಂಗಡ
ಮಾತಾಡಿದನು. ಯೆಹೋವನು ಹೀಗೆ ಹೇಳಿದನು:
2 “ಇಸ್ರೇಲರಿಗೆ ನೀನು ಹೇಳಬೇಕಾದದ್ದೇನೆಂದರೆ,
‘ನೀವು ಯೆಹೋವನಿಗೆ ಯಜ್ಞವನ್ನು ಕಾಣಿಕೆಯಾಗಿ
ಅರ್ಪಿಸುವುದಾದರೆ ನೀವು ಸಾಕಿದ ಪಶುಗಳನ್ನೇ ಅರ್ಪಿಸ
ಬೇಕು. ಅದು ದನವಾಗಲೀ ಕುರಿಯಾಗಲೀ ಆಡಾಗಲೀ
ಆಗಿರಬಹುದು.
3 “ಒಬ್ಬನು ತನ್ನ ದನಗಳಲ್ಲಿ ಒಂದನ್ನು ಸರ್ವಾಂಗ
ಹೋಮವಾಗಿ ಅರ್ಪಿಸಬಯಸಿದರೆ ಆ ಪಶುವು ಯಾವ
ದೋಷವಿಲ್ಲದ ಹೋರಿಯಾಗಿರಬೇಕು. ಅವನು ಆ ಪಶು
ವನ್ನು ದೇವದರ್ಶನಗುಡಾರದ ಬಾಗಿಲಿಗೆ ತರಬೇಕು.
ಆಗ ಯೆಹೋವನು ಆ ಸಮರ್ಪಣೆಯನ್ನು ಮೆಚ್ಚಿಕೊಳ್ಳು
ವನು. 4 ಅವನು ತನ್ನ ಕೈಯನ್ನು ಪ್ರಾಣಿಯ ತಲೆಯ
ಮೇಲಿಡಬೇಕು. ಆ ವ್ಯಕ್ತಿಯ ದೋಷಪರಿಹಾರಕ್ಕಾಗಿ
ಯೆಹೋವನು ಆ ಸರ್ವಾಂಗಹೋಮವನ್ನು ಸ್ವೀಕರಿ
ಸುವನು.
5 “ಅವನು ಹೋರಿಯನ್ನು ಯೆಹೋವನ ಸನ್ನಿಧಿಯಲ್ಲಿ
ವಧಿಸಬೇಕು. ಬಳಿಕ ಯಾಜಕರಾದ ಆರೋನನ ಪುತ್ರರು
ರಕ್ತವನ್ನು ದೇವದರ್ಶನಗುಡಾರದ ಬಾಗಿಲಿನ ಹತ್ತಿರ
ವಿರುವ ಯಜ್ಞವೇದಿಕೆಯ ಬಳಿಗೆ ತರಬೇಕು; ರಕ್ತವನ್ನು
ಸುತ್ತಲೂ ಯಜ್ಞವೇದಿಕೆಯ ಮೇಲೆ ಚಿಮಿಕಿಸಬೇಕು.
6 ಯಾಜಕನು ಆ ಪಶುವಿನ ಚರ್ಮವನ್ನು ಸುಲಿದು, ಪಶು
ವನ್ನು ತುಂಡುತುಂಡುಗಳಾಗಿ ಕಡಿಯಬೇಕು. 7 ಯಾಜಕ
ರಾದ ಆರೋನನ ಪುತ್ರರು ವೇದಿಕೆಯ ಮೇಲೆ ಬೆಂಕಿ
ಯನ್ನಿಟ್ಟು ಅದರ ಮೇಲೆ ಕಟ್ಟಿಗೆಯನ್ನು ಇಡಬೇಕು.
8 ಆರೋನನ ವಂಶದವರಾದ ಯಾಜಕರು
ವೇದಿಕೆಯಲ್ಲಿ ಬೆಂಕಿಯ ಮೇಲಿರುವ ಕಟ್ಟಿಗೆಯ ಮೇಲೆ
ತುಂಡುಗಳನ್ನು (ತಲೆ ಮತ್ತು ಕೊಬ್ಬು)ಇಡಬೇಕು.
9 ಯಾಜಕನು ಪಶು ವಿನ ಕಾಲುಗಳನ್ನು ಮತ್ತು ಒಳಗಿನ
ಭಾಗಗಳನ್ನು ನೀರಿ ನಿಂದ ತೊಳೆದು ಪಶುವಿನ ಎಲ್ಲಾ
ಭಾಗಗಳನ್ನು ವೇದಿಕೆಯ ಮೇಲೆ ಹೋಮಮಾಡಬೇಕು.
ಈ ಸರ್ವಾಂಗಹೋಮದ ಸುವಾಸನೆಯು ಯೆಹೋವನಿಗೆ
ಪ್ರಿಯವಾಗಿದೆ.
10 “ಒಬ್ಬನು ಕುರಿಯನ್ನಾಗಲೀ ಆಡನ್ನಾಗಲೀ
ಸರ್ವಾಂಗಹೋಮವಾಗಿ ಅರ್ಪಿಸುವಾಗ, ಆ ಪ್ರಾಣಿಯು
ಯಾವ ದೋಷವಿಲ್ಲದ ಗಂಡಾಗಿರಬೇಕು. 11 ಅವನು
ಯೆಹೋವನ ಸನ್ನಿಧಿಯಲ್ಲಿ ಅಂದರೆ ವೇದಿಕೆಯ ಉತ್ತರ
ಭಾಗದಲ್ಲಿ ಪಶುವನ್ನು ವಧಿಸಬೇಕು. ಬಳಿಕ ಯಾಜಕ
ರಾದ ಆರೋನನ ಪುತ್ರರು ರಕ್ತವನ್ನು ವೇದಿಕೆಯ ಮೇಲೆ
ಸುತ್ತಲೂ ಚಿಮಿಕಿಸಬೇಕು. 12 ಬಳಿಕ ಯಾಜಕನು ಆ ಪಶು
ವನ್ನು ತುಂಡುತುಂಡುಗಳಾಗಿ ಕತ್ತರಿಸಬೇಕು. ಯಾಜ
ಕನು ವೇದಿಕೆಯ ಮೇಲೆ ಬೆಂಕಿಯಲ್ಲಿರುವ ಕಟ್ಟಿಗೆಯ
ಮೇಲೆ ತುಂಡುಗಳನ್ನು (ತಲೆ ಮತ್ತು ಕೊಬ್ಬನ್ನು) ಇಡ
ಬೇಕು. 13 ಯಾಜಕನು ಪಶುವಿನ ಕಾಲುಗಳನ್ನೂ ಒಳಗಿನ
ಭಾಗಗಳನ್ನೂ ನೀರಿನಿಂದ ತೊಳೆಯಬೇಕು. ಬಳಿಕ
ಯಾಜಕನು ಪಶುವಿನ ಎಲ್ಲಾ ಭಾಗಗಳನ್ನೂ ವೇದಿಕೆಯ
ಮೇಲೆ ಹೋಮಮಾಡಬೇಕು. ಅದು ಅಗ್ನಿಯ ಮೂಲಕ
ಸಮರ್ಪಿಸಲ್ಪಟ್ಟ ಸರ್ವಾಂಗಹೋಮವಾಗಿರುತ್ತದೆ. ಅದರ
ಸುವಾಸನೆಯು ಯೆಹೋವನಿಗೆ ಪ್ರಿಯವಾಗಿದೆ.
14 “ಒಬ್ಬನು ಪಕ್ಷಿಯನ್ನು ಯೆಹೋವನಿಗೆ ಸರ್ವಾಂಗ
ಹೋಮವಾಗಿ ಅರ್ಪಿಸುವಾಗ, ಆ ಪಕ್ಷಿಯು ಬೆಳವಕ್ಕಿ
ಯಾಗಲೀ ಪಾರಿವಾಳದ ಮರಿಯಾಗಲೀ ಆಗಿರಬೇಕು.
15 ಯಾಜಕನು ಕಾಣಿಕೆಯನ್ನು ವೇದಿಕೆಯ ಬಳಿಗೆ ತರ
ಬೇಕು. ಯಾಜಕನು ಪಕ್ಷಿಯ ಕುತ್ತಿಗೆಯನ್ನು ಮುರಿದು
ವೇದಿಕೆಯ ಮೇಲೆ ಹೋಮಮಾಡಬೇಕು. ಪಕ್ಷಿಯ
ರಕ್ತವು ವೇದಿಕೆಯ ಪಾರ್ಶ್ವದಲ್ಲಿ ಹಿಂಡಲ್ಪಡಬೇಕು.
16 ಯಾಜಕನು ಪಕ್ಷಿಯ ಕರುಳುಗಳನ್ನು ಮತ್ತು ಗರಿಗಳನ್ನು
ತೆಗೆದು ಅವುಗಳನ್ನು ವೇದಿಕೆಯ ಪೂರ್ವ ದಿಕ್ಕಿನಲ್ಲಿ
ಬಿಸಾಡಬೇಕು. ಈ ಸ್ಥಳವು ವೇದಿಕೆಯಿಂದ ತೆಗೆದ ಬೂದಿ
ಯನ್ನು ಹಾಕುವ ಸ್ಥಳವಾಗಿದೆ. 17 ತರುವಾಯ ಯಾಜಕನು
ಪಕ್ಷಿಯ ರೆಕ್ಕೆಗಳನ್ನು ಹರಿದುಹಾಕಬೇಕು. ಆದರೆ ಅವನು
ಪಕ್ಷಿಯನ್ನು ಎರಡು ಭಾಗಗಳಾಗಿ ವಿಭಾಗಿಸಬಾರದು.
ಯಾಜಕನು ಪಕ್ಷಿಯನ್ನು ವೇದಿಕೆಯ ಮೇಲೆ ಬೆಂಕಿಯ
ಲ್ಲಿರುವ ಕಟ್ಟಿಗೆಗಳ ಮೇಲಿಟ್ಟು ಹೋಮಮಾಡಬೇಕು.

ಇದು ಅಗ್ನಿಯ ಮೂಲಕ ಸಮರ್ಪಣೆಯಾದ ಸರ್ವಾಂಗ
ಹೋಮವಾಗಿದೆ. ಅದರ ಸುವಾಸನೆ ಯೆಹೋವನಿಗೆ
ಪ್ರಿಯವಾಗಿದೆ.

## ಧಾನ್ಯ ಸಮರ್ಪಣೆಗಳು

2 ‘‘ಒಬ್ಬನು ದೇವರಾದ ಯೆಹೋವನಿಗೆ ಧಾನ್ಯ
ಸಮರ್ಪಣೆ ಮಾಡಬೇಕೆಂದಿದ್ದರೆ, ಅದು ಗೋಧಿ
ಹಿಟ್ಟಾಗಿರಬೇಕು. ಅವನು ಈ ಹಿಟ್ಟಿನ ಮೇಲೆ ಎಣ್ಣೆಯನ್ನು
ಹೊಯಿದು, ಧೂಪವನ್ನಿಡಬೇಕು. [2]ಬಳಿಕ ಅವನು
ಅದನ್ನು ಯಾಜಕರಾದ ಆರೋನನ ಪುತ್ರರ ಬಳಿಗೆ ತರ
ಬೇಕು. ಯಾಜಕನು ಎಣ್ಣೆ ಬೆರೆಸಿದ ಹಿಟ್ಟಿನಲ್ಲಿ ಒಂದು
ಹಿಡಿ ಹಿಟ್ಟನ್ನೂ ಧೂಪವೆಲ್ಲವನ್ನೂ ತೆಗೆದುಕೊಂಡು
ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ ವೇದಿಕೆಯ
ಮೇಲೆ ಅದನ್ನು ಹೋಮಮಾಡಬೇಕು. ಅದು ಅಗ್ನಿಯ
ಮೂಲಕ ಮಾಡಿದ ಸಮರ್ಪಣೆಯಾಗಿದೆ. ಅದರ ಸುವಾಸ
ನೆಯು ಯೆಹೋವನಿಗೆ ಪ್ರಿಯವಾಗಿದೆ. [3]ಧಾನ್ಯ ಸಮ
ರ್ಪಣೆಯಲ್ಲಿ ಉಳಿದ ಭಾಗವು ಆರೋನನಿಗೂ ಅವನ
ಪುತ್ರರಿಗೂ ಸೇರಿದ್ದಾಗಿವೆ. ಅಗ್ನಿಯ ಮೂಲಕ
ಯೆಹೋವನಿಗೆ ಮಾಡಿದ ಈ ಸಮರ್ಪಣೆಯು
ಮಹಾಪರಿಶುದ್ಧವಾಗಿದೆ.

## ಬೇಯಿಸಿದ ಧಾನ್ಯಸಮರ್ಪಣೆಗಳು

[4]‘‘ಒಬ್ಬನು ಒಲೆಯಲ್ಲಿ ಬೇಯಿಸಿದ ಧಾನ್ಯ ನೈವೇದ್ಯ
ವನ್ನು ಅರ್ಪಿಸಿದರೆ, ಆಗ ಅದು ಎಣ್ಣೆ ಬೆರೆಸಿದ ಹುಳಿ
ಯಿಲ್ಲದ ರೊಟ್ಟಿಯಾಗಲೀ ಅಥವಾ ಎಣ್ಣೆ ಹೊಯಿದು
ಮಾಡಿದ ಕಡುಬುಗಳಾಗಲೀ ಆಗಿರಬೇಕು. [5]ನಿಮ್ಮ ಧಾನ್ಯ
ನೈವೇದ್ಯವು ಕಬ್ಬಿಣದ ಹಂಚಿನಲ್ಲಿ ಬೇಯಿಸಲ್ಪಟ್ಟಿದ್ದರೆ,
ಅದು ಎಣ್ಣೆ ಬೆರೆಸಿದ ಹುಳಿಯಿಲ್ಲದ ಶ್ರೇಷ್ಠ ಹಿಟ್ಟಿನಿಂದ
ಮಾಡಿದ್ದಾಗಿರಬೇಕು. [6]ನೀವು ಅದನ್ನು ಚೂರುಚೂರು
ಗಳಾಗಿ ಮುರಿದು ಅದರ ಮೇಲೆ ಎಣ್ಣೆ ಹೊಯ್ಯಬೇಕು.
ಅದು ಧಾನ್ಯನೈವೇದ್ಯವಾಗಿದೆ. [7]ನೀವು ಬಾಂಡ್ಲೆಯಲ್ಲಿ ಪಕ್ವ
ಮಾಡಿದ ಪದಾರ್ಥವನ್ನು ಅರ್ಪಿಸಿದರೆ, ಅದು ಎಣ್ಣೆ
ಬೆರೆಸಿದ ಶ್ರೇಷ್ಠ · ಗೋದಿಹಿಟ್ಟಿನಿಂದ ಮಾಡಿದ್ದಾಗಿರ
ಬೇಕು.

[8]‘‘ನೀವು ಈ ವಸ್ತುಗಳಿಂದ ಮಾಡಿದ ಧಾನ್ಯ ನೈವೇದ್ಯ
ಗಳನ್ನು ಯೆಹೋವನಿಗೆ ಅರ್ಪಿಸುವುದಾದರೆ ನೀವು ಆ
ವಸ್ತುಗಳನ್ನು ಯಾಜಕನ ಬಳಿಗೆ ತೆಗೆದುಕೊಂಡು ಹೋಗ
ಬೇಕು. ಅವನು ಅದನ್ನು ವೇದಿಕೆಯ ಮೇಲಿಡುವನು.
[9]ಬಳಿಕ ಯಾಜಕನು ಧಾನ್ಯನೈವೇದ್ಯದ ಸ್ವಲ್ಪ ಭಾಗವನ್ನು
ತೆಗೆದುಕೊಂಡು ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ
ವೇದಿಕೆಯ ಮೇಲೆ ಹೋಮಮಾಡುವನು. ಅದು
ಅಗ್ನಿಯ ಮೂಲಕ ಮಾಡಿದ ಸಮರ್ಪಣೆಯಾಗಿದೆ. ಅದರ
ಸುವಾಸನೆಯು ಯೆಹೋವನಿಗೆ ಪ್ರಿಯವಾಗಿದೆ. [10]ಧಾನ್ಯ
ನೈವೇದ್ಯದಲ್ಲಿ ಉಳಿದದ್ದು ಆರೋನನಿಗೂ ಅವನ ಪುತ್ರ
ರಿಗೂ ಸೇರುವುದು. ಅಗ್ನಿಯ ಮೂಲಕ ಯೆಹೋವನಿಗೆ
ಮಾಡಿದ ಈ ನೈವೇದ್ಯವು ಮಹಾಪರಿಶುದ್ಧವಾಗಿದೆ.

[11]‘‘ನೀವು ಹುಳಿಹಿಟ್ಟಿನಿಂದ ಮಾಡಿದ* ಯಾವದನ್ನೂ
ಯೆಹೋವನಿಗೆ ಧಾನ್ಯಸಮರ್ಪಣೆಯಾಗಿ ಕೊಡ
ಬಾರದು. ನೀವು ಹುಳಿಯನ್ನಾಗಲೀ ಜೇನುತುಪ್ಪವನ್ನಾ
ಗಲೀ ಯೆಹೋವನಿಗೆ ಅಗ್ನಿಯ ಮೂಲಕ ಹೋಮ
ಮಾಡಬಾರದು. [12]ನೀವು ಹುಳಿಯನ್ನು ಮತ್ತು ಜೇನು
ತುಪ್ಪವನ್ನು ಪ್ರಥಮಫಲವಾಗಿ ಅರ್ಪಿಸಬಹುದು. ಆದರೆ
ಹುಳಿಯನ್ನು ಮತ್ತು ಜೇನುತುಪ್ಪವನ್ನು ವೇದಿಕೆಯ ಮೇಲೆ
ಸುಗಂಧವಾಸನೆಯಾಗಿ ಮೇಲೇರಿ ಹೋಗಲೆಂದು
ಹೋಮಮಾಡಕೂಡದು. [13]ನೀವು ಅರ್ಪಿಸುವ ಪ್ರತಿ
ಧಾನ್ಯಸಮರ್ಪಣೆಯಲ್ಲೂ ಉಪ್ಪನ್ನು ಹಾಕಬೇಕು. ನಿಮ್ಮ
ಧಾನ್ಯಸಮರ್ಪಣೆಯಲ್ಲಿ ದೇವರ ಒಡಂಬಡಿಕೆಯೆಂಬ*
ಉಪ್ಪಿರಲೇಬೇಕು. ನೀವು ಅರ್ಪಿಸುವ ನಿಮ್ಮ ಎಲ್ಲಾ
ಕಾಣಿಕೆಗಳಲ್ಲಿ ಉಪ್ಪನ್ನು ಸೇರಿಸಬೇಕು.

## ಪ್ರಥಮಫಲದ ನೈವೇದ್ಯಗಳು

[14]‘‘ನೀವು ಪ್ರಥಮಫಲವನ್ನು ಯೆಹೋವನಿಗೆ ನೈವೇದ್ಯ
ವಾಗಿ ಅರ್ಪಿಸುವಾಗ ಬೆಂಕಿಯಲ್ಲಿ ಸುಟ್ಟ ಗೋದಿತೆನೆ
ಗಳನ್ನು ತರಬೇಕು. ಅವುಗಳು ಜಜ್ಜಲ್ಪಟ್ಟ ಹಸಿ ತೆನೆಗ
ಳಾಗಿರಬೇಕು. ಇದು ನಿಮ್ಮ ಪ್ರಥಮಫಲ ನೈವೇದ್ಯವಾಗಿ
ರುವುದು. [15]ನೀವು ಅದಕ್ಕೆ ಎಣ್ಣೆಯನ್ನು ಹಾಕಿ ಅದರ
ಮೇಲೆ ಧೂಪವನ್ನಿಡಬೇಕು. ಅದು ಧಾನ್ಯಸಮರ್ಪಣೆ
ಯಾಗಿದೆ. [16]ಯಾಜಕನು ಜಜ್ಜಿದ ಧಾನ್ಯದಲ್ಲಿ ಒಂದು
ಭಾಗವನ್ನೂ, ಎಣ್ಣೆಯನ್ನೂ ಎಲ್ಲಾ ಧೂಪವನ್ನೂ ತಗೆದು
ಕೊಂಡು ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ
ಹೋಮಮಾಡಬೇಕು. ಇದು ಅಗ್ನಿಯ ಮೂಲಕ
ಯೆಹೋವನಿಗೆ ಅರ್ಪಿಸಿದ ಸಮರ್ಪಣೆಯಾಗಿದೆ.

## ಸಮಾಧಾನ ಯಜ್ಞವನ್ನು ಅರ್ಪಿಸುವ ಕ್ರಮ

3 ‘‘ಯಾವನಾದರೂ ಸಮಾಧಾನಯಜ್ಞ ಮಾಡ
ಬೇಕಾದರೆ ಅವನು ತನ್ನ ಪಶುಮಂದೆಯಿಂದ
ಗಂಡುಪಶುವನ್ನಾಗಲೀ ಹೆಣ್ಣುಪಶುವನ್ನಾಗಲೀ ಅರ್ಪಿಸ
ಬಹುದು. ಯೆಹೋವನ ಎದುರಿನಲ್ಲಿ ಅರ್ಪಿಸಲ್ಪಡುವ
ಅದು ಅಂಗದೋಷವಿಲ್ಲದ್ದಾಗಿರಬೇಕು. [2]ಆ ವ್ಯಕ್ತಿಯು
ತನ್ನ ಕೈಯನ್ನು ಪಶುವಿನ ತಲೆಯ ಮೇಲಿಟ್ಟು ದೇವ
ದರ್ಶನಗುಡಾರದ ಬಾಗಿಲಲ್ಲಿ ಅದನ್ನು ವಧಿಸಬೇಕು.

---

**‘‘ಹುಳಿಹಿಟ್ಟಿನಿಂದ ಮಾಡಿದ’’** ನಿಂಬೆರಸ, ಹುಣಿಸೆಹಣ್ಣಿನ ರಸ.

**ಒಡಂಬಡಿಕೆ** ಉಪ್ಪು ಒಡಂಬಡಿಕೆಗೆ ಗುರುತಾಗಿದೆ. ಶಾಶ್ವತವಾದ ಒಡಂಬಡಿಕೆಯು ‘‘ಉಪ್ಪಿನ ಒಡಂಬಡಿಕೆ’’ಯಾಗಿದೆ. ಅರಣ್ಯಕಾಂಡ 18:19. ಏಕೆಂದರೆ ಹುಳಹಿಡಿಯದಂತೆ ಕಾಪಾಡಲು ಉಪ್ಪನ್ನು ಬಳಸಲಾಗುತ್ತದೆ.

ಬಳಿಕ ಯಾಜಕರಾದ ಆರೋನನ ಪುತ್ರರು ಆ ರಕ್ತವನ್ನು
ಯಜ್ಞವೇದಿಕೆಯ ಮೇಲೆ ಸುತ್ತಲೂ ಚಿಮಿಕಿಸಬೇಕು.
3-4ಆ ಯಜ್ಞಪಶುವಿನ ವಪೆಯನ್ನೂ ಕರುಳುಗಳ ಮೇಲಿನ
ಎಲ್ಲಾ ಕೊಬ್ಬನ್ನೂ ಎರಡು ಮೂತ್ರಪಿಂಡಗಳನ್ನೂ
ಇವುಗಳ ಮೇಲೆ ಸೊಂಟದಲ್ಲಿರುವ ಕೊಬ್ಬನ್ನೂ ಪಿತ್ತ
ಕೋಶದ ಹತ್ತಿರ ಮೂತ್ರಪಿಂಡಗಳವರೆಗೆ ಇರುವ
ಕೊಬ್ಬನ್ನು ತೆಗೆದು ಯೆಹೋವನಿಗೆ ಹೋಮ ಮಾಡ
ಬೇಕು. 5ಬಳಿಕ ಆರೋನನ ಪುತ್ರರು ಕೊಬ್ಬನ್ನು ವೇದಿಕೆ
ಯಲ್ಲಿ ಹೋಮಮಾಡಬೇಕು. ಅವರು ಅದನ್ನು ಬೆಂಕಿ
ಯಲ್ಲಿ ಕಟ್ಟಿಗೆಯ ಮೇಲಿರುವ ಸರ್ವಾಂಗ ಹೋಮದ
ಮೇಲಿಡಬೇಕು. ಅದು ಅಗ್ನಿಯ ಮೂಲಕ ಅರ್ಪಿಸುವ
ಹೋಮವಾಗಿರುತ್ತದೆ. ಅದರ ಸುವಾಸನೆಯು
ಯೆಹೋವನಿಗೆ ಪ್ರಿಯವಾಗಿದೆ.

6‘‘ಒಬ್ಬನು ಕುರಿಯನ್ನಾಗಲೀ ಆಡನ್ನಾಗಲೀ
ಯೆಹೋವನಿಗೆ ಸಮಾಧಾನಯಜ್ಞವಾಗಿ ಕೊಡುವಾಗ, ಆ
ಪಶುವಿನಲ್ಲಿ ಯಾವ ದೋಷವೂ ಇರಬಾರದು. ಅದು
ಗಂಡು ಅಥವಾ ಹೆಣ್ಣಾಗಿರಬಹುದು. 7ಅವನು ಕುರಿಮರಿ
ಯನ್ನು ಅರ್ಪಿಸುವುದಾದರೆ, ಅದನ್ನು ಯೆಹೋವನ
ಸನ್ನಿಧಿಗೆ ತರಬೇಕು. 8ಅವನು ತನ್ನ ಕೈಯನ್ನು ಪಶುವಿನ
ತಲೆಯ ಮೇಲಿಟ್ಟು ದೇವದರ್ಶನದ ಗುಡಾರದ ಮುಂದೆ
ಅದನ್ನು ವಧಿಸಬೇಕು. ತರುವಾಯ ಆರೋನನ ಪುತ್ರರು
ಅದರ ರಕ್ತವನ್ನು ವೇದಿಕೆಯ ಮೇಲೆ ಸುತ್ತಲೂ ಚಿಮಿಕಿಸ
ಬೇಕು. 9ಅವನು ಸಮಾಧಾನ ಯಜ್ಞಪಶುವಿನ ಕೊಬ್ಬನ್ನು
ಅಂದರೆ ಬಾಲದ ಮೇಲಿರುವ ಕೊಬ್ಬನ್ನು ಕರುಳುಗಳ
ಮೇಲಿರುವ ಮತ್ತು ಅವುಗಳ ಸುತ್ತಲಿರುವ ಕೊಬ್ಬನ್ನೆಲ್ಲಾ
ಹೋಮಮಾಡಬೇಕು. 10ಅವನು ಎರಡು ಮೂತ್ರಪಿಂಡ
ಗಳನ್ನೂ ಇವುಗಳ ಮೇಲೆ ಸೊಂಟದಲ್ಲಿರುವ ಕೊಬ್ಬನ್ನೂ
ಪಿತ್ತಕೋಶದ ಮೇಲೆ ಮೂತ್ರಪಿಂಡಗಳವರೆಗೆ ಇರುವ
ಕೊಬ್ಬನ್ನೂ ಯಾಜಕನು ಯಜ್ಞವೇದಿಕೆಯ ಮೇಲೆ
ಹೋಮಮಾಡಬೇಕು. 11ಅದು ಯೆಹೋವನಿಗೆ
ಬೆಂಕಿಯ ಮೂಲಕ ಅರ್ಪಿಸಿದ ಆಹಾರವಾಗುವುದು.

### ಸಮಾಧಾನ ಯಜ್ಞಪಶು – ಆಡು

12‘‘ಸಮರ್ಪಿಸಲ್ಪಡುವ ಪಶು ಆಡಾಗಿದ್ದರೆ, ಸಮ
ರ್ಪಿಸುವವನು ಅದನ್ನು ಯೆಹೋವನ ಸನ್ನಿಧಿಗೆ ತರ
ಬೇಕು. 13ಅವನು ತನ್ನ ಕೈಯನ್ನು ಆಡಿನ ತಲೆಯ
ಮೇಲಿಟ್ಟು ದೇವದರ್ಶನಗುಡಾರದ ಮುಂದೆ ಅದನ್ನು
ವಧಿಸಬೇಕು. ಬಳಿಕ ಆರೋನನ ಗಂಡುಮಕ್ಕಳು ಆಡಿನ
ರಕ್ತವನ್ನು ವೇದಿಕೆಯ ಮೇಲೆ ಅದರ ಸುತ್ತಲೂ ಚಿಮಿಕಿಸ
ಬೇಕು. 14ಅವನು ಸಮಾಧಾನ ಯಜ್ಞದ ಪಶುವಿನ ವಪೆ
ಯನ್ನೂ ಕರುಳುಗಳ ಮೇಲಿನ ಎಲ್ಲಾ ಕೊಬ್ಬನ್ನೂ ಎರಡು
ಮೂತ್ರಪಿಂಡಗಳನ್ನೂ ಇವುಗಳ ಮೇಲೆ ಸೊಂಟದಲ್ಲಿ
ರುವ ಕೊಬ್ಬನ್ನೂ ಪಿತ್ತಾಶಯದ ಹತ್ತಿರ ಮೂತ್ರಪಿಂಡಗಳ
ತನಕ ಇರುವ ಕೊಬ್ಬನ್ನೂ ಯೆಹೋವನಿಗೋಸ್ಕರ ಸಮ
ರ್ಪಿಸಬೇಕು. 15ಅವನು ಅದರ ಎರಡು ಮೂತ್ರಪಿಂಡ
ಗಳನ್ನು ಮತ್ತು ಸೊಂಟದವರೆಗೆ ಅವುಗಳನ್ನು ಆವರಿಸಿರುವ
ಕೊಬ್ಬನ್ನು ಸಮರ್ಪಿಸಬೇಕು. ಅವನು ಪಿತ್ತಾಶಯವನ್ನು
ಮತ್ತು ಅದನ್ನು ಆವರಿಸಿರುವ ಕೊಬ್ಬನ್ನು ಸಮರ್ಪಿಸ
ಬೇಕು. ಅವನು ಮೂತ್ರಪಿಂಡಗಳೊಂದಿಗೆ ಪಿತ್ತಾಶಯ
ವನ್ನೂ ಸಮರ್ಪಿಸಬೇಕು. 16ಬಳಿಕ ಯಾಜಕನು ಅವು
ಗಳನ್ನು ವೇದಿಕೆಯ ಮೇಲೆ ಹೋಮಮಾಡಬೇಕು. ಇದು
ಆಹಾರ ರೂಪದಲ್ಲಿ ಯೆಹೋವನಿಗೆ ಅರ್ಪಿಸಿದ ಸುವಾಸನೆ
ಯನ್ನು ಉಂಟುಮಾಡುವ ಸಮಾಧಾನ ಯಜ್ಞವಾಗಿರು
ತ್ತದೆ. ಆದರೆ ಅದರ ಕೊಬ್ಬು ಯೆಹೋವನಿಗೆ ಸೇರಿದೆ.
17ನಿಮ್ಮ ಎಲ್ಲಾ ಸಂತತಿಗಳವರಿಗೆ ಈ ನಿಯಮವು ಶಾಶ್ವತ
ವಾದದ್ದು. ನೀವೆಲ್ಲೇ ವಾಸಿಸಿದರೂ ನೀವು ಕೊಬ್ಬ
ನ್ನಾಗಲೀ ರಕ್ತವನ್ನಾಗಲೀ ಎಂದಿಗೂ ತಿನ್ನಬಾರದು.’’

### ತಿಳಿಯದೆ ಮಾಡಿದ ಪಾಪಗಳ ಪರಿಹಾರಕ್ಕಾಗಿ ಸಮರ್ಪಣೆಗಳು

4 ಯೆಹೋವನು ಮೋಶೆಯೊಡನೆ ಮಾತನಾಡಿ
ಹೇಳಿದ್ದೇನೆಂದರೆ: 2‘‘ಇಸ್ರೇಲರಿಗೆ ಹೀಗೆ ಹೇಳು:
ಯಾವನಾದರೂ ತಿಳಿಯದೇ ಪಾಪಮಾಡಿದರೆ ಮತ್ತು
ಮಾಡಬಾರದೆಂದು ಹೇಳಿದವುಗಳನ್ನು ಮಾಡಿದರೆ,
ಅವನು ಮಾಡಬೇಕಾದದ್ದೇನೆಂದರೆ:

3‘‘ಅಭಿಷಿಕ್ತನಾದ ಯಾಜಕನು ತಪ್ಪು ಮಾಡಿ ಜನರೆಲ್ಲ
ರನ್ನು ಅಪರಾಧಕ್ಕೆ ಒಳಪಡಿಸಿದರೆ ತನ್ನ ದೋಷಪರಿಹಾರ
ಕ್ಕಾಗಿ ಅವನು ಪೂರ್ಣಾಂಗವಾದ ಹೋರಿಯನ್ನು
ಯೆಹೋವನಿಗೆ ಅರ್ಪಿಸಬೇಕು. 4ಅಭಿಷಿಕ್ತನಾದ ಯಾಜ
ಕನು ಹೋರಿಯನ್ನು ದೇವದರ್ಶನ ಗುಡಾರದ ಬಾಗಿಲಿಗೆ
ತಂದು ತನ್ನ ಕೈಯನ್ನು ಅದರ ತಲೆಯ ಮೇಲಿಟ್ಟು
ಯೆಹೋವನ ಸನ್ನಿಧಿಯಲ್ಲಿ ಅದನ್ನು ವಧಿಸಬೇಕು.
5ಬಳಿಕ ಅವನು ಹೋರಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದು
ಕೊಂಡು ದೇವದರ್ಶನಗಡಾರದೊಳಗೆ ಹೋಗಬೇಕು.
6ಯಾಜಕನು ತನ್ನ ಬೆರಳನ್ನು ರಕ್ತದಲ್ಲಿ ಅದ್ದಿ ಮಹಾಪವಿತ್ರ
ಸ್ಥಳದ ಪರದೆಯ ಮುಂಭಾಗದಲ್ಲಿರುವ ಯೆಹೋವನ
ಸನ್ನಿಧಿಯಲ್ಲಿ ಏಳು ಸಲ ಚಿಮಿಕಿಸಬೇಕು. 7ಯಾಜಕನು
ಸ್ವಲ್ಪ ರಕ್ತವನ್ನು ಧೂಪವೇದಿಕೆಯ ಮೂಲೆಗಳಿಗೆ ಹಚ್ಚ
ಬೇಕು. (ಈ ವೇದಿಕೆಯು ಯೆಹೋವನ ಸನ್ನಿಧಿಯಲ್ಲಿ
ರುವ ದೇವದರ್ಶನಗುಡಾರದಲ್ಲಿದೆ.) ಯಾಜಕನು
ಹೋರಿಯ ರಕ್ತವನ್ನೆಲ್ಲಾ ಸರ್ವಾಂಗಹೋಮಮಾಡುವ
ವೇದಿಕೆಯ ಬುಡದಲ್ಲಿ ಸುರಿಯಬೇಕು. (ಈ ವೇದಿಕೆಯು
ದೇವದರ್ಶನಗುಡಾರದ ಬಾಗಿಲಲ್ಲಿ ಇರುತ್ತದೆ.)
8ಅವನು ಪಾಪಪರಿಹಾರಕ ಯಜ್ಞಕ್ಕಾಗಿ ತಂದಿರುವ

ಹೋರಿಯ ಕೊಬ್ಬನ್ನೆಲ್ಲಾ ತೆಗೆಯಬೇಕು, ಅವನು ಅದರ
ಒಳಗಿನ ಭಾಗಗಳ ಮೇಲೆ ಮತ್ತು ಅವುಗಳ ಸುತ್ತಲೂ
ಇರುವ ಕೊಬ್ಬನ್ನೂ 9ಅದರ ಎರಡು ಮೂತ್ರ ಪಿಂಡ
ಗಳನ್ನೂ ಅವುಗಳ ಸೊಂಟದವರೆಗೆ ಆವರಿಸಿರುವ
ಕೊಬ್ಬನ್ನೂ ಪಿತ್ತಾಶಯವನ್ನು ಆವರಿಸಿರುವ ಕೊಬ್ಬನ್ನೂ
ತೆಗೆಯಬೇಕು. ಅವನು ಮೂತ್ರಪಿಂಡಗಳೊಡನೆ ಪಿತ್ತಾಶ
ಯವನ್ನೂ ತೆಗೆಯಬೇಕು. 10ಯಾಜಕನು ಈ ಭಾಗ
ಗಳನ್ನು ಸಮಾಧಾನಯಜ್ಞ ಸಮರ್ಪಣೆಯಲ್ಲಿ ಹೋರಿಯ
ಭಾಗಗಳನ್ನು ಅರ್ಪಿಸುವ ರೀತಿಯಲ್ಲಿಯೇ ಅರ್ಪಿಸ
ಬೇಕು. ಯಾಜಕನು ಪಶುವಿನ ಭಾಗಗಳನ್ನು ಸರ್ವಾಂಗ
ಹೋಮಮಾಡುವ ವೇದಿಕೆಯ ಮೇಲೆ ಹೋಮ ಮಾಡ
ಬೇಕು. 11-12ಆದರೆ ಯಾಜಕನು ಹೋರಿಯ ಚರ್ಮ
ವನ್ನು, ಒಳಗಿನ ಭಾಗಗಳನ್ನು, ದೇಹದ ಕಲ್ಮಶವನ್ನು,
ಎಲ್ಲಾ ಮಾಂಸವನ್ನು ಮತ್ತು ತಲೆ ಕಾಲುಗಳನ್ನು ಹೊರಗೆ
ತೆಗೆದುಕೊಂಡು ಪಾಳೆಯದ ಹೊರಗೆ ಬೂದಿಯನ್ನು ಸುರಿ
ಯುವ ವಿಶೇಷಸ್ಥಳಕ್ಕೆ ತೆಗೆದುಕೊಂಡು ಹೋಗಿ ಕಟ್ಟಿಗೆಯ
ಮೇಲಿಟ್ಟು ಬೆಂಕಿಯಲ್ಲಿ ಸುಟ್ಟುಹಾಕಬೇಕು. ಬೂದಿ
ಯನ್ನು ಸುರಿಯುವ ಸ್ಥಳದಲ್ಲಿಯೇ ಅದನ್ನು ಸುಡಬೇಕು.

13“ಇಸ್ರೇಲರ ಇಡೀ ಜನಾಂಗವೆಲ್ಲಾ ತಿಳಿಯದೆ ಪಾಪ
ಮಾಡುವ ಸ್ಥಿತಿ ಸಂಭವಿಸಬಹುದು. ಯೆಹೋವನು
ಮಾಡಬಾರದೆಂದು ಆಜ್ಞಾಪಿಸಿದ ಕಾರ್ಯಗಳಲ್ಲಿ ಯಾವು
ದಾದರೊಂದನ್ನು ಅವರು ಮಾಡಿರಬಹುದು. ಇದು ಸಂಭ
ವಿಸಿದರೆ ಅವರು ದೋಷಿಗಳಾಗುವರು. 14ಆ ಪಾಪದ
ಕುರಿತು ಅವರಿಗೆ ತಿಳಿದುಬಂದರೆ ಆಗ ಅವರು ಒಂದು
ಹೋರಿಯನ್ನು ಇಡೀ ಜನಾಂಗದ ಪಾಪಪರಿಹಾರ
ಮಾಡುವ ಸಮರ್ಪಣೆಯಾಗಿ ಅರ್ಪಿಸಬೇಕು. ಅವರು
ಹೋರಿಯನ್ನು ದೇವದರ್ಶನಗುಡಾರಕ್ಕೆ ತರಬೇಕು.
15ಜನರ ಹಿರಿಯರು ಯೆಹೋವನ ಸನ್ನಿಧಿಯಲ್ಲಿ ತಮ್ಮ
ಕೈಗಳನ್ನು ಹೋರಿಯ ತಲೆಯ ಮೇಲಿಡಬೇಕು. ತರು
ವಾಯ ಒಬ್ಬನು ಯೆಹೋವನ ಸನ್ನಿಧಿಯಲ್ಲಿ ಹೋರಿ
ಯನ್ನು ವಧಿಸಬೇಕು. 16ಬಳಿಕ ಅಭಿಷಿಕ್ತನಾದ ಯಾಜ
ಕನು ಹೋರಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು
ದೇವದರ್ಶನಗುಡಾರದೊಳಗೆ ಹೋಗಬೇಕು. 17ಯಾಜ
ಕನು ತನ್ನ ಬೆರಳನ್ನು ರಕ್ತದಲ್ಲಿ ಅದ್ದಿ ಯೆಹೋವನ ಸನ್ನಿಧಿ
ಯಲ್ಲಿ ತೆರೆಯ ಮುಂದೆ ಏಳು ಸಲ ಚಿಮಿಕಿಸಬೇಕು.
18ಬಳಿಕ ಯಾಜಕನು ರಕ್ತದಲ್ಲಿ ಸ್ವಲ್ಪವನ್ನು ವೇದಿಕೆಯ
ಮೂಲೆಗಳಲ್ಲಿ ಹಾಕಬೇಕು. (ಈ ವೇದಿಕೆಯು ದೇವ
ದರ್ಶನಗುಡಾರದಲ್ಲಿ ಯೆಹೋವನ ಸನ್ನಿಧಿಯಲ್ಲಿ ಇರು
ತ್ತದೆ.) ಯಾಜಕನು ರಕ್ತವನ್ನೆಲ್ಲಾ ಸರ್ವಾಂಗಹೋಮ
ಮಾಡುವ ವೇದಿಕೆಯ ಬುಡದಲ್ಲಿ ಸುರಿದುಬಿಡಬೇಕು.
(ಈ ವೇದಿಕೆಯು ದೇವದರ್ಶನ ಗುಡಾರದ ಬಾಗಿಲಲ್ಲಿ
ಇರುತ್ತದೆ.) 19ತರುವಾಯ ಯಾಜಕನು ಪಶುವಿನಿಂದ
ಕೊಬ್ಬನ್ನೆಲ್ಲಾ ತೆಗೆದು ಅದನ್ನು ವೇದಿಕೆಯ ಮೇಲೆ
ಹೋಮಮಾಡಬೇಕು. 20ಯಾಜಕನು ಪಾಪಪರಿಹಾರಕ
ಯಜ್ಞದ ಹೋರಿಯ ಭಾಗಗಳನ್ನು ಸಮರ್ಪಿಸಿದಂತೆಯೇ
ಈ ಭಾಗಗಳನ್ನು ಅರ್ಪಿಸಬೇಕು. ಈ ರೀತಿಯಾಗಿ, ಯಾಜ
ಕನು ಜನರಿಗಾಗಿ ಪ್ರಾಯಶ್ಚಿತ್ತ ಮಾಡುವನು. ಆಗ
ದೇವರು ಅವರನ್ನು ಕ್ಷಮಿಸುವನು. 21ಯಾಜಕನು ಈ
ಹೋರಿಯನ್ನು ಪಾಳೆಯದ ಹೊರಗೆ ತೆಗೆದುಕೊಂಡು
ಹೋಗಿ, ಆ ಮೊದಲನೆಯ ಹೋರಿಯನ್ನು ಸುಟ್ಟು
ಹಾಕಿದ ಸ್ಥಳದಲ್ಲಿಯೇ ಅದನ್ನು ಸುಡಬೇಕು. ಇದು ಇಡೀ
ಸಮೂಹದ ಪಾಪವನ್ನು ಪರಿಹಾರ ಮಾಡುವ ಸಮರ್ಪಣೆ
ಯಾಗಿದೆ.

22“ಒಬ್ಬ ಅಧಿಪತಿಯು ತನ್ನ ದೇವರಾಗಿರುವ
ಯೆಹೋವನು ನಿಷೇಧಿಸಿದವುಗಳಲ್ಲಿ ಯಾವುದನ್ನಾ
ದರೂ ಒಂದನ್ನು ತಿಳಿಯದೆ ಮಾಡಿದರೆ ಅವನು ದೋಷಿ
ಯಾಗುತ್ತಾನೆ. 23ಅಧಿಪತಿಯು ತನ್ನ ಪಾಪದ ಕುರಿತು
ತಿಳಿದುಕೊಂಡರೆ, ಅಂಗದೋಷವಿಲ್ಲದ ಹೋತವನ್ನು
ತರಬೇಕು. ಅದು ಅವನ ಕಾಣಿಕೆಯಾಗಿರುವುದು. 24ಅಧಿ
ಪತಿಯು ತನ್ನ ಕೈಯನ್ನು ಹೋತದ ತಲೆಯ ಮೇಲಿಟ್ಟು
ಯೆಹೋವನ ಸನ್ನಿಧಿಯಲ್ಲಿ ಸರ್ವಾಂಗಹೋಮ ಪಶುಗ
ಳನ್ನು ವಧಿಸುವ ಸ್ಥಳದಲ್ಲಿ ಅದನ್ನು ವಧಿಸಬೇಕು. ಅದು
ಪಾಪಪರಿಹಾರಕ ಯಜ್ಞವಾಗಿದೆ. 25ಯಾಜಕನು ಪಾಪ
ಪರಿಹಾರದ ಯಜ್ಞದ ರಕ್ತದಲ್ಲಿ ಸ್ವಲ್ಪವನ್ನು ತನ್ನ ಬೆರಳಿ
ನಲ್ಲಿ ತೆಗೆದುಕೊಂಡು ಸರ್ವಾಂಗಹೋಮ ಮಾಡುವ
ವೇದಿಕೆಯ ಮೂಲೆಗಳಿಗೆ* ಹಚ್ಚಬೇಕು. ಯಾಜಕನು
ಉಳಿದ ರಕ್ತವನ್ನು ವೇದಿಕೆಯ ಬುಡದಲ್ಲಿ ಸುರಿದು,
26ಹೋತದ ಕೊಬ್ಬನ್ನೆಲ್ಲಾ ವೇದಿಕೆಯ ಮೇಲೆ ಹೋಮ
ಮಾಡಬೇಕು. ಅದು ಸಮಾಧಾನ ಯಜ್ಞವಾಗಿದೆ.
ಕೊಬ್ಬನ್ನು ಹೋಮಮಾಡುವಂತೆ ಅದನ್ನು ಹೋಮ
ಮಾಡಬೇಕು. ಹೀಗೆ ಯಾಜಕನು ಅಧಿಪತಿಯನ್ನು ಶುದ್ಧ
ಗೊಳಿಸುವನು. ಆಗ ದೇವರು ಆ ಅಧಿಪತಿಯನ್ನು
ಕ್ಷಮಿಸುವನು.

27“ಸಾಮಾನ್ಯ ಜನರಲ್ಲಿ ಒಬ್ಬನು ಯೆಹೋವನು
ನಿಷೇಧಿಸಿದವುಗಳಲ್ಲಿ ಯಾವುದನ್ನಾದರೂ ಒಂದನ್ನು ತಿಳಿ
ಯದೆ ಮಾಡಿದರೆ ಅವನು ದೋಷಿಯಾಗಿದ್ದಾನೆ. 28ಆ
ವ್ಯಕ್ತಿ ತನ್ನ ಪಾಪದ ಕುರಿತು ತಿಳಿದುಕೊಂಡರೆ, ಆಗ ಅವನು
ಅಂಗದೋಷವಿಲ್ಲದ ಒಂದು ಮೇಕೆಯನ್ನು ತರಬೇಕು.
ಅದು ಅವನ ಪಾಪಪರಿಹಾರಕ ಯಜ್ಞವಾಗಿದೆ. ಅವನು
ತಾನು ಮಾಡಿದ ಪಾಪಕ್ಕಾಗಿ ಮೇಕೆಯನ್ನು ತರಬೇಕು.
29ಅವನು ತನ್ನ ಕೈಯನ್ನು ಅದರ ತಲೆಯ ಮೇಲಿಟ್ಟು
ಸರ್ವಾಂಗಹೋಮ ಮಾಡುವ ಸ್ಥಳದಲ್ಲಿ ಅದನ್ನು ವಧಿಸ
ಬೇಕು. 30ಬಳಿಕ ಯಾಜಕನು ಅದರ ರಕ್ತದಲ್ಲಿ ಸ್ವಲ್ಪವನ್ನು

---

**ಮೂಲೆಗಳಿಗೆ** ಅಕ್ಷರಶಃ ಯಜ್ಞವೇದಿಕೆಯ ಕೊಂಬುಗಳಿಗೆ.

ತನ್ನ ಬೆರಳಿನಲ್ಲಿ ತೆಗೆದುಕೊಂಡು ಸರ್ವಾಂಗಹೋಮ
ಮಾಡುವ ವೇದಿಕೆಯ ಮೂಲೆಗಳಿಗೆ ಹಚ್ಚಬೇಕು. ಬಳಿಕ
ಯಾಜಕನು ಆಡಿನ ಉಳಿದ ರಕ್ತವನ್ನು ವೇದಿಕೆಯ ಬುಡ
ದಲ್ಲಿ ಸುರಿಯಬೇಕು. 31ಯಾಜಕನು ಸಮಾಧಾನ ಯಜ್ಞ
ಗಳಲ್ಲಿ ಕೊಬ್ಬನ್ನು ಪ್ರತ್ಯೇಕಿಸಿದಂತೆಯೇ ಆಡಿನ ಕೊಬ್ಬ
ನ್ನೆಲ್ಲಾ ಪ್ರತ್ಯೇಕಿಸಿ ಅದನ್ನು ಯೆಹೋವನಿಗೆ ಸುಗಂಧ
ವಾಸನೆಯ ಹೋಮವಾಗಿ ವೇದಿಕೆಯ ಮೇಲೆ ಅರ್ಪಿಸ
ಬೇಕು. ಹೀಗೆ ಯಾಜಕನು ಆ ವ್ಯಕ್ತಿಯನ್ನು ಶುದ್ಧಿಗೊಳಿಸು
ವನು.* ಆಗ ದೇವರು ಆ ವ್ಯಕ್ತಿಯನ್ನು ಕ್ಷಮಿಸುವನು.

32“ಆ ವ್ಯಕ್ತಿಯು ಕುರಿಮರಿಯನ್ನು ತನ್ನ ಪಾಪಪರಿ
ಹಾರಕ ಯಜ್ಞವಾಗಿ ತರುವುದಾದರೆ ಅದು ದೋಷ
ವಿಲ್ಲದ ಹೆಣ್ಣು ಕುರಿಮರಿಯಾಗಿರಬೇಕು. 33ಅವನು ತನ್ನ
ಕೈಯನ್ನು ಅದರ ತಲೆಯ ಮೇಲಿಟ್ಟು ಅದನ್ನು ಸರ್ವಾಂಗ
ಹೋಮದ ಯಜ್ಞಪಶುಗಳನ್ನು ವಧಿಸುವ ಸ್ಥಳದಲ್ಲಿ ಪಾಪ
ಪರಿಹಾರಕ ಯಜ್ಞವಾಗಿ ವಧಿಸಬೇಕು. 34ಯಾಜಕನು
ಪಾಪಪರಿಹಾರಕ ಯಜ್ಞದ ರಕ್ತದಲ್ಲಿ ಸ್ವಲ್ಪವನ್ನು ತನ್ನ
ಬೆರಳಿನಲ್ಲಿ ತೆಗೆದುಕೊಂಡು ಸರ್ವಾಂಗಹೋಮ
ಮಾಡುವ ವೇದಿಕೆಯ ಮೂಲೆಗಳಿಗೆ ಹಚ್ಚಬೇಕು. ಬಳಿಕ
ಯಾಜಕನು ಕುರಿಮರಿಯ ರಕ್ತವನ್ನೆಲ್ಲಾ ವೇದಿಕೆಯ
ಬುಡದಲ್ಲಿ ಸುರಿಯಬೇಕು. 35ಯಾಜಕನು ಸಮಾಧಾನ
ಯಜ್ಞಗಳಲ್ಲಿ ಕುರಿಮರಿಯ ಕೊಬ್ಬನ್ನು ಪ್ರತ್ಯೇಕಿಸಿ
ದಂತೆಯೇ ಈ ಕುರಿಮರಿಯ ಕೊಬ್ಬನ್ನೆಲ್ಲಾ ಪ್ರತ್ಯೇಕಿಸಿ
ಅದನ್ನು ಅಗ್ನಿಯ ಮೂಲಕ ಯೆಹೋವನಿಗೆ ಅರ್ಪಿಸುವ
ಸಮರ್ಪಣೆಯಂತೆ ವೇದಿಕೆಯ ಮೇಲೆ ಹೋಮಮಾಡ
ಬೇಕು. ಹೀಗೆ ಯಾಜಕನು ಆ ವ್ಯಕ್ತಿಯನ್ನು ಅವನು
ಮಾಡಿದ ಪಾಪದಿಂದ ಶುದ್ಧಿಗೊಳಿಸುವನು.* ಆಗ
ದೇವರು ಆ ವ್ಯಕ್ತಿಯನ್ನು ಕ್ಷಮಿಸುವನು.

### ತಿಳಿಯದೆ ಮಾಡುವ ಪಾಪಗಳು

5 “ನ್ಯಾಯಾಧಿಕಾರಿಯು ತಿಳಿಸಬೇಕೆಂದು ಕೇಳಿದರೂ
ಒಬ್ಬನು ತಾನು ಕಂಡದ್ದನ್ನಾಗಲೀ ಕೇಳಿದ್ದನ್ನಾಗಲೀ
ತಿಳಿಸದೇ ಹೋದರೆ ಅವನು ಪಾಪಕ್ಕೆ ಗುರಿಯಾಗಿದ್ದಾನೆ.
2ಯಾವನಾದರೂ ಅಶುದ್ಧವಾದ* ಕಾಡುಮೃಗ, ಪಶು,
ಜಂತು ಇವುಗಳ ಹೆಣವನ್ನಾಗಲೀ ಅಥವಾ ಬೇರೆ ಯಾವ
ಅಶುದ್ಧ ವಸ್ತುವನ್ನಾಗಲೀ ಮುಟ್ಟಿದರೆ ತಾನು ಮುಟ್ಟಿದ್ದು
ತಿಳಿಯದಿದ್ದರೂ ಅವನು ಅಶುದ್ಧನೂ ದೋಷಿಯೂ
ಆಗಿರುವನು. 3ಒಬ್ಬನು ಮತ್ತೊಬ್ಬನ ದೇಹದೊಳಗಿಂದ
ಬರುವ ಯಾವುದಾದರೂ ಅಶುದ್ಧ ವಸ್ತುವನ್ನು ತಿಳಿಯದೆ
ಮುಟ್ಟಿದರೂ, ತಿಳಿದುಬಂದಾಗ ಅವನು ದೋಷಿಯಾಗು
ವನು. 4ಒಬ್ಬನು ಆಲೋಚಿಸದೆ ಒಳ್ಳೆಯದಕ್ಕಾಗಲೀ ಕೆಟ್ಟ
ದಕ್ಕಾಗಲೀ ಮಾತು ಕೊಟ್ಟು ಮರೆತುಬಿಟ್ಟರೆ, ಅದು ಅವನ
ನೆನಪಿಗೆ ಬಂದಾಗ ಅವನು ದೋಷಿಯಾಗುವನು. 5ಈ
ವಿಷಯಗಳಲ್ಲಿ ಯಾವುದಾದರೊಂದರಲ್ಲಿ ದೋಷಿ
ಯಾದರೆ, ಅವನು ತನ್ನ ತಪ್ಪನ್ನು ಒಪ್ಪಿಕೊಂಡು ಅರಿಕೆ
ಮಾಡಬೇಕು. 6ಅವನು ದೋಷಪರಿಹಾರಕ್ಕಾಗಿ ಹೆಣ್ಣು
ಕುರಿಮರಿಯನ್ನಾಗಲೀ ಹೆಣ್ಣು ಮೇಕೆಯನ್ನಾಗಲೀ ಯಜ್ಞ
ವಾಗಿ ಸಮರ್ಪಿಸಬೇಕು. ಯಾಜಕನು ಅವನಿಗೋಸ್ಕರ
ದೋಷಪರಿಹಾರ ಮಾಡುವನು.

7“ಅವನು ಕುರಿಮರಿಯನ್ನು ಕೊಡುವುದಕ್ಕೆ ಶಕ್ತನಾಗಿ
ಲ್ಲದಿದ್ದರೆ, ಎರಡು ಬೆಳವಕ್ಕಿಗಳನ್ನಾಗಲೀ ಅಥವಾ ಎರಡು
ಪಾರಿವಾಳದ ಮರಿಗಳನ್ನಾಗಲೀ ತಂದು ಅವುಗಳಲ್ಲಿ
ಒಂದನ್ನು ದೋಷಪರಿಹಾರಕ ಯಜ್ಞವನ್ನಾಗಿಯೂ
ಇನ್ನೊಂದನ್ನು ಸರ್ವಾಂಗಹೋಮವಾಗಿಯೂ ಸಮ
ರ್ಪಿಸಬೇಕು. 8ಅವನು ಅವುಗಳನ್ನು ಯಾಜಕನ ಬಳಿಗೆ
ತರಬೇಕು. ಯಾಜಕನು ಮೊದಲು ಒಂದು ಪಕ್ಷಿಯನ್ನು
ಪಾಪಪರಿಹಾರಕ ಯಜ್ಞವನ್ನಾಗಿ ಅರ್ಪಿಸುವನು. ಯಾಜ
ಕನು ಪಕ್ಷಿಯ ಕುತ್ತಿಗೆಯನ್ನು ಮುರಿಯುವನು. ಆದರೆ
ಯಾಜಕನು ಪಕ್ಷಿಯನ್ನು ಎರಡು ಭಾಗಗಳನ್ನಾಗಿ ವಿಭಾಗಿ
ಸುವುದಿಲ್ಲ. 9ಯಾಜಕನು ಪಾಪಪರಿಹಾರಕ ಯಜ್ಞದಿಂದ
ರಕ್ತವನ್ನು ತೆಗೆದುಕೊಂಡು ಯಜ್ಞವೇದಿಕೆಯ ಬದಿಯಲ್ಲಿ
ಚಿಮಿಕಿಸಬೇಕು. ಬಳಿಕ ಯಾಜಕನು ಉಳಿದ ರಕ್ತವನ್ನು
ವೇದಿಕೆಯ ಬುಡದಲ್ಲಿ ಸುರಿಯಬೇಕು. ಅದು ಪಾಪಪರಿ
ಹಾರಕ ಯಜ್ಞವಾಗಿರುತ್ತದೆ. 10ತರುವಾಯ ಯಾಜಕನು
ಎರಡನೆಯ ಪಕ್ಷಿಯನ್ನು ಸರ್ವಾಂಗಹೋಮದ ವಿಧಿಗಳಿ
ಗನುಸಾರವಾಗಿ ಅರ್ಪಿಸಬೇಕು. ಈ ರೀತಿಯಾಗಿ, ಯಾಜ
ಕನು ಆ ವ್ಯಕ್ತಿಯನ್ನು ಅವನು ಮಾಡಿದ ಪಾಪದಿಂದ ಶುದ್ಧಿ
ಗೊಳಿಸುವನು. ಆಗ ದೇವರು ಅವನನ್ನು ಕ್ಷಮಿಸುವನು.

11“ಎರಡು ಬೆಳವಕ್ಕಿಗಳನ್ನಾಗಲೀ ಅಥವಾ ಎರಡು
ಪಾರಿವಾಳದ ಮರಿಗಳನ್ನಾಗಲೀ ತರುವುದಕ್ಕೆ ಅವನು ಶಕ್ತ
ನಾಗಿಲ್ಲದಿದ್ದರೆ, ಆಗ ಅವನು ಎಂಟು ಬಟ್ಟಲು* ಶ್ರೇಷ್ಠ
ಗೋಧಿಹಿಟ್ಟನ್ನು ತರಬೇಕು. ಇದು ಅವನ ಪಾಪಪರಿ
ಹಾರಕ ಯಜ್ಞವಾಗಿರುವುದು. ಅವನು ಹಿಟ್ಟಿಗೆ ಎಣ್ಣೆ
ಯನ್ನು ಹಾಕಬಾರದು. ಅವನು ಅದರ ಮೇಲೆ ಸುಗಂಧ
ದೂಪವನ್ನು ಇಡಬಾರದು, ಯಾಕಂದರೆ ಅದು ಪಾಪಪರಿ
ಹಾರಕ ಯಜ್ಞವಾಗಿರುತ್ತದೆ. 12ಅವನು ಹಿಟ್ಟನ್ನು ಯಾಜ
ಕನ ಬಳಿಗೆ ತರಬೇಕು. ಯಾಜಕನು ಒಂದು ಹಿಡಿಹಿಟ್ಟನ್ನು
ಅದರಿಂದ ತೆಗೆದು ದೇವಾರ್ಪಿತವಾಯಿತೆಂದು ಸೂಚಿಸು
ವುದಕ್ಕಾಗಿ ವೇದಿಕೆಯ ಮೇಲೆ ಹೋಮಮಾಡುವನು.
ಅದು ಅಗ್ನಿಯ ಮೂಲಕ ಯೆಹೋವನಿಗೆ ಅರ್ಪಿಸಿದ

---

**ಶುದ್ಧಿಗೊಳಿಸುವನು** ಅಥವಾ “ಪ್ರಾಯಶ್ಚಿತ್ತ ಮಾಡುವನು.”

**ಶುದ್ಧಿಗೊಳಿಸುವನು** ಅಥವಾ “ಪ್ರಾಯಶ್ಚಿತ್ತಮಾಡು.” ಹೀಬ್ರೂ ಪದವು, “ಮುಚ್ಚು” “ಅಡಗಿಸು” ಅಥವಾ “ಪಾಪವನ್ನು ಅಳಿಸಿಹಾಕು” ಎಂಬರ್ಥಗಳನ್ನು ಕೊಡುತ್ತದೆ.

**ಅಶುದ್ಧ** ದೇವಾರಾಧನೆಗೆ ಸ್ವೀಕೃತವಾದದ್ದಲ್ಲ.

**ಎಂಟು ಬಟ್ಟಲು** ಅಕ್ಷರಶಃ “1/10 ಏಫಾ.”

ಸಮರ್ಪಣೆಯಾಗಿರುವುದು. ಅದು ಪಾಪಪರಿಹಾರಕ
ಸಮರ್ಪಣೆಯಾಗಿದೆ. 13ಹೀಗೆ ಆ ವ್ಯಕ್ತಿಯನ್ನು ಅವನ
ದೋಷಗಳಿಂದ ಶುದ್ಧೀಕರಿಸುವನು. ಆಗ ದೇವರು ಆ
ವ್ಯಕ್ತಿಯನ್ನು ಕ್ಷಮಿಸುವನು. ಧಾನ್ಯ ನೈವೇದ್ಯದಲ್ಲಿರು
ವಂತೆಯೇ* ಯಜ್ಞದಲ್ಲಿ ಉಳಿದ ಭಾಗವು ಯಾಜಕನಿಗೆ
ಸೇರಿದೆ. ಧಾನ್ಯ ಸಮರ್ಪಣೆಯಲ್ಲಿಯೂ ಉಳಿದ ಭಾಗವು
ಯಾಜಕನಿಗೆ ಸೇರಿದೆ.''

14ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
15''ಒಬ್ಬನು ಯೆಹೋವನ ಪರಿಶುದ್ಧ ವಸ್ತುಗಳ ವಿಷಯ
ದಲ್ಲಿ ಮೀರಿ ನಡೆದು ತಿಳಿಯದೆ ತಪ್ಪು ಮಾಡಿದರೆ ಅವನು
ಅಂಗದೋಷವಿಲ್ಲದ ಟಗರನ್ನು ತರಬೇಕು. ಇದು ಅವನಿ
ಗಾಗಿ ಯೆಹೋವನಿಗೆ ಸಮರ್ಪಣೆಯಾಗುವ ದೋಷಪರಿ
ಹಾರಕ ಯಜ್ಞ. ನೀವು ಅಧಿಕೃತ ಅಳತೆಯನ್ನು* ಉಪ
ಯೋಗಿಸಿ ಟಗರಿನ ಬೆಲೆಯನ್ನು ಗೊತ್ತುಮಾಡಬೇಕು.''
16 ಆ ವ್ಯಕ್ತಿಯೂ ಪರಿಶುದ್ಧ ವಸ್ತುಗಳ ವಿಷಯದಲ್ಲಿ
ಮಾಡಿದ ಪಾಪಕ್ಕಾಗಿ ಈ ಬೆಲೆಯನ್ನು ತೆರಬೇಕು.
ಇದಲ್ಲದೆ ಆ ಬೆಲೆಯ ಐದನೆಯ ಒಂದು ಭಾಗವನ್ನು
ಸೇರಿಸಿ ಆ ಹಣವನ್ನು ಯಾಜಕನಿಗೆ ಕೊಡಬೇಕು. ಆ
ರೀತಿಯಾಗಿ, ಯಾಜಕನು ಟಗರನ್ನು ದೋಷಪರಿಹಾರಕ
ಯಜ್ಞವಾಗಿ ಅರ್ಪಿಸುವುದರ ಮೂಲಕ ಅವನನ್ನು ಶುದ್ಧ
ಮಾಡುವನು. ಆಗ ದೇವರು ಆ ವ್ಯಕ್ತಿಯನ್ನು
ಕ್ಷಮಿಸುವನು.

17''ಯಾವನಾದರೂ ಯೆಹೋವನು ನಿಷೇದಿಸಿದ
ಕಾರ್ಯಗಳಲ್ಲಿ ಯಾವುದಾದರೊಂದನ್ನು ಮಾಡಿ,
ದೋಷಕ್ಕೆ ಗುರಿಯಾಗಿದ್ದರೆ ಅದು ಅವನಿಗೆ ತಿಳಿದಿಲ್ಲದಿ
ದ್ದರೂ ಅವನು ಆ ಪಾಪಫಲವನ್ನು ಅನುಭವಿಸಬೇಕು.
18ಅವನು ಅಂಗದೋಷವಿಲ್ಲದ ಮತ್ತು ಸರಿಯಾದ ಬೆಲೆ
ಬಾಳುವ ಟಗರನ್ನು ಯಾಜಕನ ಬಳಿಗೆ ತರಬೇಕು. ಟಗರು
ದೋಷಪರಿಹಾರಕ ಯಜ್ಞವಾಗಿರುವುದು. ಹೀಗೆ ಯಾಜ
ಕನು ತಿಳಿಯದೆ ಮಾಡಿದ ಪಾಪದಿಂದ ಅವನನ್ನು ಶುದ್ಧ
ಮಾಡುವನು. ಆಗ ದೇವರು ಅವನನ್ನು ಕ್ಷಮಿಸುವನು.
19ಅವನು ದೋಷಿಯಾದ್ದರಿಂದ ಯೆಹೋವನಿಗೆ ದೋಷ
ಪರಿಹಾರಕ ಯಜ್ಞವನ್ನು ಸಮರ್ಪಿಸಬೇಕು.''

## ಬೇರೆ ಪಾಪಗಳಿಗಾಗಿ ದೋಷಪರಿಹಾರಕ ಯಜ್ಞಗಳು

6 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2''ಯಾವನಾದರೂ ಮತ್ತೊಬ್ಬನಿಂದ ತನ್ನ ವಶಕ್ಕೆ
ಕೊಡಲ್ಪಟ್ಟ ವಸ್ತುವಿನ ವಿಷಯದಲ್ಲಾಗಲೀ ತನ್ನ
ಬಳಿಯಲ್ಲಿ ಅಡವು ಇಟ್ಟ ವಸ್ತುವಿನ ವಿಷಯದಲ್ಲಾಗಲೀ
ತಾನು ಮಾಡಿದ ಕಳುವಿನ ವಿಷಯದಲ್ಲಾಗಲೀ ಸುಳ್ಳಾಡು
ವುದರಿಂದಾಗಲೀ ಮತ್ತೊಬ್ಬನನ್ನು ಮೋಸಗೊಳಿಸುವುದ
ರಿಂದಾಗಲೀ 3ಮತ್ತೊಬ್ಬನು ಕಳೆದುಕೊಂಡದ್ದನ್ನು ಕಂಡು
ಕೊಂಡು ಅದರ ಬಗ್ಗೆ ಸುಳ್ಳು ಹೇಳುವುದರಿಂದಾಗಲೀ
ಮಾಡಿದ ಪ್ರಮಾಣವನ್ನು ಉಲ್ಲಂಘಿಸುವುದರಿಂದಾಗಲೀ
ಪಾಪಮಾಡಿ ಯೆಹೋವನಿಗೆ ದ್ರೋಹಮಾಡಿದರೆ,
4ಅವನು ತಾನು ಕದ್ದದ್ದನ್ನಾಗಲೀ ಮೋಸದಿಂದ ತೆಗೆದು
ಕೊಂಡದ್ದನ್ನಾಗಲೀ ಅಡವು ಇಟ್ಟುಕೊಂಡದ್ದನ್ನಾಗಲೀ
ಕಂಡುಕೊಂಡ ಅಥವಾ ಕಳೆದುಹೋದ ವಸ್ತುವನ್ನಾಗಲೀ
5ಸುಳ್ಳಾಣೆ ಇಟ್ಟುಕೊಂಡ ವಸ್ತುವನ್ನಾಗಲೀ ಸಂಪೂರ್ಣ
ವಾಗಿ ತಂದುಕೊಡಬೇಕು, ಅದರೊಂದಿಗೆ ಅದರ
ಐದನೆಯ ಒಂದಂಶವನ್ನು ಹೆಚ್ಚಾಗಿ ತಂದುಕೊಡಬೇಕು.
ದೋಷಪರಿಹಾರಕ ಯಜ್ಞವನ್ನು ಅರ್ಪಿಸುವ ದಿನ
ದಲ್ಲಿಯೇ ನಿಜವಾದ ಯಜಮಾನನಿಗೆ ಇದನ್ನು ತಂದು
ಕೊಡಬೇಕು.

6''ಆ ವ್ಯಕ್ತಿ ದೋಷಪರಿಹಾರಕ ಯಜ್ಞವನ್ನು ಯಾಜಕನ
ಬಳಿಗೆ ತರಬೇಕು. ಅದು ಮಂದೆಯಿಂದ ತಂದ ಟಗರಾ
ಗಿರಬೇಕು. ಟಗರಿನಲ್ಲಿ ಯಾವ ದೋಷವೂ ಇರ
ಬಾರದು. ಅದು ಯಾಜಕನು ಹೇಳುವ ಬೆಲೆಯುಳ್ಳದ್ದಾ
ಗಿರಬೇಕು. ಅದು ಯೆಹೋವನಿಗೆ ಸಮರ್ಪಿಸುವ ದೋಷ
ಪರಿಹಾರಕ ಯಜ್ಞವಾಗಿರುವುದು. 7ಬಳಿಕ ಯಾಜಕನು
ಯೆಹೋವನ ಸನ್ನಿಧಿಗೆ ಹೋಗಿ ಅವನನ್ನು ಶುದ್ಧಿ
ಮಾಡುವನು. ಆಗ ದೇವರು ಅವನನ್ನು ಕ್ಷಮಿಸುವನು.''

## ಸರ್ವಾಂಗಹೋಮಗಳು

8ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
9''ಆರೋನನಿಗೂ ಅವನ ಪುತ್ರರಿಗೂ ಈ ಅಪ್ಪಣೆಯನ್ನು
ಕೊಡು: ಸರ್ವಾಂಗಹೋಮದ ನಿಯಮ ಇದಾಗಿದೆ.
ಸರ್ವಾಂಗಹೋಮವು ವೇದಿಕೆಯ ಒಲೆಯಲ್ಲಿ* ರಾತ್ರಿ
ಯೆಲ್ಲಾ ಮರುದಿನ ಮುಂಜಾನೆಯವರೆಗೆ ಉರಿಯುತ್ತಿರ
ಬೇಕು. ವೇದಿಕೆಯಲ್ಲಿ ಬೆಂಕಿಯು ಉರಿಯುತ್ತಿರಬೇಕು.
10ಯಾಜಕನು ತನ್ನ ನಾರಿನ ನಿಲುವಂಗಿಯನ್ನೂ ನಾರಿನ
ಚಡ್ಡಿಯನ್ನೂ ಧರಿಸಿಕೊಳ್ಳಬೇಕು. ಯಾಜಕನು
ಸರ್ವಾಂಗಹೋಮ ಮಾಡಿದಾಗ ಬೆಂಕಿಯಿಂದ
ಉಂಟಾದ ಬೂದಿಯನ್ನು ತೆಗೆದು ವೇದಿಕೆಯ ಬಳಿಯ
ಲ್ಲಿಡಬೇಕು. 11ಬಳಿಕ ಯಾಜಕನು ತನ್ನ ಬಟ್ಟೆಗಳನ್ನು
ತೆಗೆದುಹಾಕಿ ಬೇರೆ ಬಟ್ಟೆಗಳನ್ನು ಧರಿಸಿಕೊಂಡು ಬೂದಿ
ಯನ್ನು ಪಾಳೆಯದ ಹೊರಗೆ ಒಂದು ವಿಶೇಷ ಸ್ಥಳಕ್ಕೆ*
ತೆಗೆದುಕೊಂಡು ಹೋಗಬೇಕು. 12ಆದರೆ ವೇದಿಕೆಯ

---

**ಧಾನ್ಯ ನೈವೇದ್ಯ** ಜ್ಞಾಪಕಾರ್ಥ ಭಾಗವನ್ನು ಅರ್ಪಿಸಿದ ನಂತರ ಉಳಿದ ಭಾಗವು ಯಾಜಕನಿಗೆ ಸೇರಿದ್ದು. ಹೋಲಿಸಿ ನೋಡಿ ಯಾಜಕಕಾಂಡ 2:35.

**ಅಧಿಕೃತ ಅಳತೆ** ಅಕ್ಷರಶಃ, ''ಪರಿಶುದ್ಧ ಶೆಕೆಲ್.''

**ವೇದಿಕೆಯ ಒಲೆ** ಯಜ್ಞವನ್ನು ಸುಡುವ ಸ್ಥಳ.

**ವಿಶೇಷ ಸ್ಥಳಕ್ಕೆ** ಅಕ್ಷರಶಃ ''ಪರಿಶುದ್ಧ ಸ್ಥಳಕ್ಕೆ'' ಅಂದರೆ ಸಾಂಪ್ರದಾಯಕವಾಗಿ ಶುದ್ಧಪಡಿಸಿದ ಅಥವಾ ಶುಚಿಪಡಿಸಿದ ಎಂದರ್ಥ.

ಮೇಲೆ ಬೆಂಕಿ ಉರಿಯುತ್ತಲೇ ಇರಬೇಕು. ಅದು ಆರಿ
ಹೋಗುವುದಕ್ಕೆ ಬಿಡಬಾರದು, ಯಾಜಕನು ಪ್ರತಿ
ಮುಂಜಾನೆ ವೇದಿಕೆಯ ಮೇಲೆ ಕಟ್ಟಿಗೆಯನ್ನು ತಂದು
ಹಾಕಬೇಕು. ಅವನು ಬೆಂಕಿಯ ಮೇಲೆ ಸರ್ವಾಂಗ
ಹೋಮವನ್ನು ಸಿದ್ಧಪಡಿಸಿ, ಸಮಾಧಾನದ ಯಜ್ಞದ
ಕೊಬ್ಬನ್ನು ಸುಡಬೇಕು. 13ಬೆಂಕಿಯು ವೇದಿಕೆಯ ಮೇಲೆ
ಉರಿಯುತ್ತಲೇ ಇರಬೇಕು; ಆರಿಹೋಗಬಾರದು.

## ಧಾನ್ಯ ಸಮರ್ಪಣೆಗಳು

14“ಇದು ಧಾನ್ಯ ಸಮರ್ಪಣೆಯ ನಿಯಮವಾಗಿದೆ.
ಆರೋನನ ಪುತ್ರರು ಅದನ್ನು ಸಮರ್ಪಿಸಲು ಯಜ್ಞವೇದಿ
ಕೆಯ ಮುಂಭಾಗದಲ್ಲಿ ಯೆಹೋವನ ಬಳಿಗೆ ತರಬೇಕು.
15ಯಾಜಕನು ಧಾನ್ಯನೈವೇದ್ಯದಿಂದ ಒಂದು ಹಿಡಿ ಶ್ರೇಷ್ಠ
ಹಿಟ್ಟನ್ನು ಮತ್ತು ಎಣ್ಣೆಯನ್ನು ಮತ್ತು ಎಲ್ಲಾ ಧೂಪವನ್ನು
ತೆಗೆದುಕೊಂಡು ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ
ಅದನ್ನು ವೇದಿಕೆಯ ಮೇಲೆ ಸುಡಬೇಕು. ಅದರ ಸುವಾಸ
ನೆಯು ಯೆಹೋವನಿಗೆ ಪ್ರಿಯವಾಗಿದೆ.

16“ಆರೋನನು ಮತ್ತು ಅವನ ಪುತ್ರರು ಧಾನ್ಯ
ನೈವೇದ್ಯದಲ್ಲಿ ಉಳಿದದ್ದನ್ನು ತಿನ್ನಬೇಕು. ಅವರು ಆ ಹಿಟ್ಟಿ
ನಿಂದ ಹುಳಿಯಿಲ್ಲದ ರೊಟ್ಟಿಗಳನ್ನು ಮಾಡಿಸಿಕೊಂಡು
ಪವಿತ್ರಸ್ಥಳದಲ್ಲಿ ಅಂದರೆ ದೇವದರ್ಶನಗುಡಾರದ ಸುತ್ತಲಿ
ರುವ ಅಂಗಳದಲ್ಲಿ ತಿನ್ನಬೇಕು. 17ಹುಳಿ ಕಲಸಿ ರೊಟ್ಟಿ
ಸುಡಬಾರದು. ನನಗೆ ಅಗ್ನಿಯ ಮೂಲಕ ಹೋಮವಾಗಿ
ಅರ್ಪಿಸಿದ ಸಮರ್ಪಣೆಗಳಲ್ಲಿ ನಾನು ಅದನ್ನು ಯಾಜಕರ
ಪಾಲನ್ನಾಗಿ ಕೊಟ್ಟಿದ್ದೇನೆ. ಅದು ಪಾಪಪರಿಹಾರಕ ಯಜ್ಞ
ದಂತೆಯೂ ದೋಷಪರಿಹಾರಕ ಯಜ್ಞದಂತೆಯೂ
ಮಹಾಪವಿತ್ರವಾಗಿದೆ. 18ಆರೋನನ ವಂಶದವರಾದ
ಗಂಡಸರೆಲ್ಲರೂ ಅಗ್ನಿಯ ಮೂಲಕ ಯೆಹೋವನಿಗೆ
ಅರ್ಪಿಸಿದ ಸಮರ್ಪಣೆಗಳನ್ನು ತಿನ್ನಬಹುದು. ಇದು ನಿಮ್ಮ
ಸಂತತಿಯವರಿಗೆ ಶಾಶ್ವತವಾದ ನಿಯಮವಾಗಿದೆ. ಈ
ಕಾಣಿಕೆಗಳಿಗೆ ತಗಲಿದ್ದೆಲ್ಲಾ ಪವಿತ್ರವಾಗುತ್ತವೆ.”

## ಯಾಜಕರ ಧಾನ್ಯ ನೈವೇದ್ಯ

19ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
20“ಆರೋನನು ಮತ್ತು ಅವನ ಪುತ್ರರು ಆರೋನನ
ನಂತರ ಯೆಹೋವನ ಸನ್ನಿಧಿಗೆ ತರಬೇಕಾದ ಧಾನ್ಯಸಮ
ರ್ಪಣೆ ಇದಾಗಿದೆ. ಅವರು (ಮಹಾಯಾಜಕರಾಗಿ) ಅಭಿ
ಷೇಕಿಸಲ್ಪಡುವ ದಿನದಲ್ಲಿ ಇದನ್ನು ಮಾಡಬೇಕು. ಅವರು
ಎಂಟು ಬಟ್ಟಲು* ಶ್ರೇಷ್ಠ ಗೋಧಿಹಿಟ್ಟನ್ನು ಧಾನ್ಯ
ನೈವೇದ್ಯಕ್ಕಾಗಿ ತರಬೇಕು. (ದಿನನಿತ್ಯದ ನೈವೇದ್ಯಗಳ
ಸಮಯಗಳಲ್ಲಿ ಇದನ್ನು ಅರ್ಪಿಸಬೇಕು.) ಅವರು ಇದ
ರಲ್ಲಿ ಅರ್ಧದಷ್ಟನ್ನು ಮುಂಜಾನೆಯಲ್ಲಿ ಮತ್ತು ಉಳಿದ
ರ್ಧವನ್ನು ಸಾಯಂಕಾಲದಲ್ಲಿ ಅರ್ಪಿಸಬೇಕು. 21ಶ್ರೇಷ್ಠ
ವಾದ ಗೋಧಿಹಿಟ್ಟಿಗೆ ಎಣ್ಣೆಯನ್ನು ಬೆರೆಸಿ ಕಬ್ಬಿಣದ
ಹಂಚಿನ ಮೇಲೆ ರೊಟ್ಟಿ ಸುಡಬೇಕು. ಅದನ್ನು ಬೇಯಿಸಿದ
ಮೇಲೆ ನೀವು ಅದನ್ನು ಒಳಗೆ ತರಬೇಕು. ನೀವು ಈ ಸಮ
ರ್ಪಣೆಯನ್ನು ತುಂಡುತುಂಡಾಗಿ ಮುರಿದು ಸಮರ್ಪಿಸ
ಬೇಕು. ಅದರ ಸುವಾಸನೆಯು ಯೆಹೋವನಿಗೆ ಪ್ರಿಯ
ವಾಗಿದೆ.

22“ಆರೋನನ ಸ್ಥಾನವನ್ನು ಹೊಂದುವುದಕ್ಕಾಗಿ
ಆರೋನನ ಸಂತತಿಯವರಲ್ಲಿ ಆರಿಸಲ್ಪಟ್ಟು ಅಭಿಷೇಕಿಸ
ಲ್ಪಟ್ಟ ಯಾಜಕನು ಯೆಹೋವನಿಗೆ ಈ ಧಾನ್ಯ ಸಮರ್ಪಣೆ
ಯನ್ನು ಮಾಡಬೇಕು. ಈ ನಿಯಮ ಶಾಶ್ವತವಾದದ್ದು.
ಧಾನ್ಯ ಸಮರ್ಪಣೆಯು ಸಂಪೂರ್ಣವಾಗಿ ಹೋಮವಾಗ
ಬೇಕು. 23ಯಾಜಕನ ಪ್ರತಿಯೊಂದು ಧಾನ್ಯ ಸಮರ್ಪ
ಣೆಯು ಸಂಪೂರ್ಣವಾಗಿ ಹೋಮವಾಗಬೇಕು. ಅದನ್ನು
ತಿನ್ನಲೇಬಾರದು.”

## ಪಾಪಪರಿಹಾರ ಯಜ್ಞದ ಕಟ್ಟಳೆ

24ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
25“ಆರೋನನಿಗೆ ಮತ್ತು ಅವನ ಪುತ್ರರಿಗೆ ಹೀಗೆ ಹೇಳು:
ಪಾಪಪರಿಹಾರಕ ಯಜ್ಞದ ಕಟ್ಟಳೆ ಇದಾಗಿದೆ. ಸರ್ವಾಂಗ
ಹೋಮ ಪಶುವು ವಧಿಸಲ್ಪಡುವ ಸ್ಥಳದಲ್ಲಿಯೇ ಪಾಪಪರಿ
ಹಾರಕ ಯಜ್ಞಪಶುವು ಯೆಹೋವನ ಸನ್ನಿಧಿಯಲ್ಲಿ ವಧಿಸ
ಲ್ಪಡಬೇಕು. ಅದು ಮಹಾಪವಿತ್ರವಾಗಿದೆ. 26ಪಾಪಪರಿ
ಹಾರಕ ಯಜ್ಞವನ್ನು ಅರ್ಪಿಸುವ ಯಾಜಕನು ಅದನ್ನು
ಪವಿತ್ರಸ್ಥಳದಲ್ಲಿ ಅಂದರೆ ದೇವದರ್ಶನಗುಡಾರದ ಸುತ್ತ
ಲಿರುವ ಅಂಗಳದಲ್ಲಿ ತಿನ್ನಬೇಕು. 27ಪಾಪಪರಿಹಾರಕ
ಯಜ್ಞದ ಮಾಂಸವು ತಗಲಿದ ವಸ್ತುವೂ ಪವಿತ್ರವಾಗುತ್ತದೆ;
ಮುಟ್ಟುವ ವ್ಯಕ್ತಿಯು ಪವಿತ್ರವಾಗುವನು.

“ಚಿಮಿಕಿಸಲ್ಪಟ್ಟ ರಕ್ತದಲ್ಲಿ ಸ್ವಲ್ಪ ರಕ್ತವು ಯಾರ
ಬಟ್ಟೆಯ ಮೇಲಾದರೂ ಬಿದ್ದರೆ, ನೀವು ಆ ಬಟ್ಟೆಗಳನ್ನು
ಪವಿತ್ರಸ್ಥಳದಲ್ಲಿ ತೊಳೆಯಬೇಕು. 28ಪಾಪಪರಿಹಾರಕ
ಯಜ್ಞವನ್ನು ಮಣ್ಣಿನ ಮಡಕೆಯಲ್ಲಿ ಬೇಯಿಸಿದರೆ, ಆ
ಮಡಕೆಯನ್ನು ಒಡೆದುಹಾಕಬೇಕು. ಪಾಪಪರಿಹಾರಕ
ಯಜ್ಞವನ್ನು ತಾಮ್ರದ ಪಾತ್ರೆಯಲ್ಲಿ ಬೇಯಿಸಿದರೆ, ಆ
ಪಾತ್ರೆಯನ್ನು ಉಜ್ಜಿ ನೀರಿನಲ್ಲಿ ತೊಳೆಯಬೇಕು.

29“ಯಾಜಕನ ಕುಟುಂಬದಲ್ಲಿರುವ ಯಾವ ಪುರುಷ
ನಾದರೂ ಪಾಪಪರಿಹಾರಕ ಯಜ್ಞದ ಮಾಂಸವನ್ನು ತಿನ್ನ
ಬಹುದು. ಅದು ಬಹಳ ಪವಿತ್ರವಾಗಿದೆ. 30ಆದರೆ, ಪಾಪ
ಪರಿಹಾರಕ ಯಜ್ಞದ ರಕ್ತವನ್ನು ದೇವದರ್ಶನ ಗುಡಾರ
ದೊಳಗೆ ತೆಗೆದುಕೊಂಡು ಹೋಗಿ, ಜನರನ್ನು ಶುದ್ಧಿ
ಗೊಳಿಸಲು ಪವಿತ್ರಸ್ಥಳದಲ್ಲಿ ಉಪಯೋಗಿಸಿದರೆ, ಆ ಪಾಪ
ಪರಿಹಾರಕ ಯಜ್ಞವನ್ನು ಅಗ್ನಿಯಲ್ಲಿ ಸುಟ್ಟುಬಿಡಬೇಕು.
ಯಾಜಕರು ಅದರ ಮಾಂಸವನ್ನು ತಿನ್ನಲೇಬಾರದು.

---

**ಎಂಟು ಬಟ್ಟಲು** ಅಕ್ಷರಶಃ, “1/10 ಏಫಾ.”

### ದೋಷಪರಿಹಾರಕ ಯಜ್ಞಗಳು

7 ‘‘ದೋಷಪರಿಹಾರಕ ಯಜ್ಞದ ನಿಯಮಗಳು: ಅದು
ಪವಿತ್ರವಾದದ್ದು. 2ಯಾಜಕನು ಸರ್ವಾಂಗಹೋಮ
ಸಮರ್ಪಣೆಗಳ ಪಶುವನ್ನು ವಧಿಸುವ ಸ್ಥಳದಲ್ಲಿಯೇ
ದೋಷಪರಿಹಾರಕ ಪಶುವನ್ನು ವಧಿಸಬೇಕು. ಬಳಿಕ
ಯಾಜಕನು ದೋಷಪರಿಹಾರಕ ಯಜ್ಞದ ರಕ್ತವನ್ನು
ವೇದಿಕೆಯ ಸುತ್ತಲೂ ಚಿಮಿಕಿಸಬೇಕು.
3‘‘ಯಾಜಕನು ದೋಷಪರಿಹಾರಕ ಯಜ್ಞಪಶುವಿನ
ಕೊಬ್ಬನ್ನೆಲ್ಲಾ ಅರ್ಪಿಸಬೇಕು. ಅವನು ಬಾಲದ ಕೊಬ್ಬನ್ನು
ಮತ್ತು ಒಳಗಿನ ಭಾಗಗಳನ್ನು ಆವರಿಸಿರುವ ಕೊಬ್ಬನ್ನೆಲ್ಲಾ
ಸಮರ್ಪಿಸಬೇಕು. 4ಯಾಜಕನು ಅದರ ಎರಡು ಮೂತ್ರ
ಪಿಂಡಗಳನ್ನು ಮತ್ತು ಅವುಗಳನ್ನು ಸೊಂಟದವರೆಗೆ
ಆವರಿಸಿರುವ ಕೊಬ್ಬನ್ನೂ ಪಿತ್ತಾಶಯವನ್ನು ಆವರಿಸಿರುವ
ಕೊಬ್ಬನ್ನೂ ಅರ್ಪಿಸಬೇಕು. ಅವನು ಮೂತ್ರಪಿಂಡಗ
ಳೊಡನೆ ಪಿತ್ತಾಶಯವನ್ನು ಅರ್ಪಿಸಬೇಕು. 5ಯಾಜಕನು
ಅವುಗಳನ್ನು ವೇದಿಕೆಯ ಮೇಲೆ ಹೋಮಮಾಡಬೇಕು.
ಇದು ಅಗ್ನಿಯ ಮೂಲಕ ಯೆಹೋವನಿಗೆ ಅರ್ಪಿತವಾದ
ಹೋಮವಾಗಿರುವುದು. ಅದು ದೋಷಪರಿಹಾರಕ
ಯಜ್ಞವಾಗಿದೆ.
6‘‘ಯಾಜಕನಾಗಿರುವ ಪ್ರತಿಯೊಬ್ಬನು ದೋಷಪರಿ
ಹಾರಕ ಯಜ್ಞಮಾಂಸವನ್ನು ತಿನ್ನಬಹುದು. ಅದು ಬಹು
ಪವಿತ್ರವಾಗಿರುವುದರಿಂದ ಅದನ್ನು ಪವಿತ್ರಸ್ಥಳದಲ್ಲಿ ತಿನ್ನ
ಬೇಕು. 7ದೋಷಪರಿಹಾರಕ ಯಜ್ಞವು ಪಾಪಪರಿಹಾರಕ
ಯಜ್ಞದಂತಿದೆ. ಒಂದೇ ರೀತಿಯ ನಿಯಮಗಳು ಈ
ಎರಡು ಸಮರ್ಪಣೆಗಳಿಗೆ ಅನ್ವಯಿಸುತ್ತವೆ. ಯಜ್ಞ ಸಮ
ರ್ಪಿಸುವ ಯಾಜಕನು ಆಹಾರಕ್ಕಾಗಿ ಅದರ ಮಾಂಸವನ್ನು
ಪಡೆಯುವನು. 8ಯಜ್ಞಮಾಡುವ ಯಾಜಕನು
ಸರ್ವಾಂಗಹೋಮ ಪಶುವಿನ ಚರ್ಮವನ್ನು ಪಡೆಯ
ಬಹುದು. 9ಪ್ರತಿ ಧಾನ್ಯಸಮರ್ಪಣೆಯು ಅದನ್ನು ಅರ್ಪಿ
ಸುವ ಯಾಜಕನಿಗೆ ಸೇರುತ್ತದೆ. ಒಲೆಯಲ್ಲಾಗಲೀ ಕಬ್ಬಿ
ಣದ ಹಂಚಿನಲ್ಲಾಗಲೀ ಬಾಂಡ್ಲೆಯಲ್ಲಾಗಲೀ ಬೇಯಿ
ಸಿದ ಧಾನ್ಯಸಮರ್ಪಣೆಗಳನ್ನು ಯಾಜಕನು ಪಡೆಯು
ವನು. 10ದಾನ್ಯ ಸಮರ್ಪಣೆಗಳು ಆರೋನನ ಪುತ್ರರಿಗೆ
ಸೇರುವುವು. ಅದು ಒಣಗಿದ್ದರೂ ಎಣ್ಣೆಯಿಂದ ಬೆರೆತಿ
ದ್ದರೂ ಅವರಿಗೆ ಸೇರುವುವು. ಆರೋನನ ಪುತ್ರರೆಲ್ಲರೂ
(ಯಾಜಕರು) ಈ ಆಹಾರವನ್ನು ಹಂಚಿಕೊಳ್ಳುವರು.

### ಸಮಾಧಾನಯಜ್ಞ ಕಟ್ಟಳೆಗಳು

11‘‘ಸಮಾಧಾನಯಜ್ಞದ ಕಟ್ಟಳೆಗಳು ಇಂತಿವೆ: ಯಾರಾ
ದರೂ ಯೆಹೋವನಿಗೆ ಕೃತಜ್ಞತೆಯಿಂದ ಸಮಾಧಾನ
ಯಜ್ಞಗಳನ್ನು ಅರ್ಪಿಸಬೇಕೆಂದಿದ್ದರೆ, 12ಅವನು ಎಣ್ಣೆ
ಬೆರೆಸಿದ ಹುಳಿಯಿಲ್ಲದ ರೊಟ್ಟಿಯನ್ನೂ ಎಣ್ಣೆ ಹೊಯಿದು
ಮಾಡಿದ ಕಡುಬುಗಳನ್ನೂ ಎಣ್ಣೆ ಬೆರೆಸಿದ ಹೋಳಿಗೆಗ
ಳನ್ನೂ ತರಬೇಕು. 13ಅವನು ದೇವರಿಗೆ ತನ್ನ ಕೃತಜ್ಞತೆ
ಯನ್ನು ಸೂಚಿಸುವುದಕ್ಕಾಗಿ ಅರ್ಪಿಸುವ ಯಜ್ಞವೇ ಸಮಾ
ಧಾನ ಯಜ್ಞವಾಗಿದೆ. ಈ ಯಜ್ಞದೊಡನೆ ಅವನು ಹುಳಿ
ಯಿರುವ ರೊಟ್ಟಿಗಳ ನೈವೇದ್ಯವನ್ನು ಅರ್ಪಿಸಬೇಕು.
14ಸಮರ್ಪಿಸಲ್ಪಟ್ಟ ಪ್ರತಿಯೊಂದು ಪದಾರ್ಥಗಳಲ್ಲೂ
ಒಂದೊಂದನ್ನು ಯೆಹೋವನಿಗೆ ಕಾಣಿಕೆಯಾಗಿ ಕೊಡ
ಬೇಕು. ಸಮಾಧಾನಯಜ್ಞದ ರಕ್ತವನ್ನು ಚಿಮಿಕಿಸುವ
ಯಾಜಕನಿಗೆ ಇದು ಸಲ್ಲತಕ್ಕದ್ದು. 15ಸಮಾಧಾನಯಜ್ಞದ
ಮಾಂಸವನ್ನು ಅದು ಸಮರ್ಪಣೆಯಾದ ದಿನದಲ್ಲಿಯೇ
ತಿನ್ನಬೇಕು. ಒಬ್ಬನು ದೇವರಿಗೆ ತನ್ನ ಕೃತಜ್ಞತೆಯನ್ನು
ಸೂಚಿಸುವುದಕ್ಕಾಗಿ ಈ ಕಾಣಿಕೆಯನ್ನು ಅರ್ಪಿಸುತ್ತಾನೆ.
ಆದರೆ ಮಾಂಸದಲ್ಲಿ ಮರುದಿನದ ಮುಂಜಾನೆಯವರೆಗೆ
ಏನೂ ಉಳಿಸಬಾರದು.
16‘‘ಯಾವನಾದರೂ ಸ್ವಇಚ್ಛೆಯ ಕಾಣಿಕೆಗಾಗಲೀ
ಹರಕೆಯನ್ನು ಸಲ್ಲಿಸುವುದಕ್ಕಾಗಲೀ ಸಮಾಧಾನಯಜ್ಞ
ಅರ್ಪಿಸಬಹುದು. ಅಥವಾ ಆ ವ್ಯಕ್ತಿ ದೇವರಿಗೆ ಕಾಣಿಕೆ
ಯನ್ನು ಅರ್ಪಿಸಿದರೆ, ಅವನು ಅದರ ಯಜ್ಞಮಾಂಸವನ್ನು
ಸಮರ್ಪಿಸಿದ ದಿನದಲ್ಲಿಯೇ ತಿನ್ನಬೇಕು. ಉಳಿದದ್ದನ್ನು
ಮರುದಿನ ತಿನ್ನಬೇಕು. 17ಆದರೆ, ಈ ಯಜ್ಞ ಪಶುವು
ಮೂರನೆಯ ದಿನದವರೆಗೆ ಉಳಿದರೆ, ಅದನ್ನು ಬೆಂಕಿ
ಯಲ್ಲಿ ಸುಡಬೇಕು. 18ಒಬ್ಬನು ತನ್ನ ಸಮಾಧಾನ ಯಜ್ಞ
ದಲ್ಲಿ ಉಳಿದದ್ದನ್ನು ಮೂರನೆಯ ದಿನದಲ್ಲಿ ತಿಂದರೆ,
ಯೆಹೋವನು ಅವನ ವಿಷಯದಲ್ಲಿ ಸಂತೋಷಗೊಳ್ಳು
ವುದಿಲ್ಲ. ಯೆಹೋವನು ಆ ಯಜ್ಞವನ್ನು ಅವನ ಲೆಕ್ಕಕ್ಕೆ
ತೆಗೆದುಕೊಳ್ಳುವುದಿಲ್ಲ. ಆ ಯಜ್ಞವು ಅಸಹ್ಯ ವಸ್ತುವಾಗು
ವುದು. ಆ ಮಾಂಸವನ್ನು ತಿಂದವನು ಆ ಪಾಪದ ಫಲವನ್ನು
ಅನುಭವಿಸುವನು.
19‘‘ಮಾತ್ರವಲ್ಲದೆ ಜನರು ಅಶುದ್ಧವಾದ ವಸ್ತುವಿಗೆ
ಸೋಂಕಿದ ಮಾಂಸವನ್ನು ತಿನ್ನಬಾರದು. ಅವರು ಈ
ಮಾಂಸವನ್ನು ಬೆಂಕಿಯಲ್ಲಿ ಸುಟ್ಟುಹಾಕಬೇಕು. ಶುದ್ಧ
ನಾಗಿರುವ ಪ್ರತಿಯೊಬ್ಬನು ಸಮಾಧಾನ ಸರ್ಮಪಣೆಯ
ಮಾಂಸವನ್ನು ತಿನ್ನಬಹುದು. 20ಆದರೆ ಒಬ್ಬನು ಅಶುದ್ಧ
ನಾಗಿದ್ದು ಯೆಹೋವನಿಗೆ ಸೇರಿದ ಸಮಾಧಾನ ಸಮ
ರ್ಪಣೆಗಳ ಮಾಂಸವನ್ನು ತಿಂದರೆ, ಅವನನ್ನು ಅವನ ಕುಲ
ದಿಂದ ಬಹಿಷ್ಕರಿಸಬೇಕು.
21‘‘ಒಬ್ಬನಿಗೆ ಮನುಷ್ಯದೇಹದಿಂದ ಆಗಿರುವ ಅಶುದ್ಧ
ವಸ್ತು, ಅಶುದ್ಧ ಮೃಗ, ನಿಷಿದ್ಧ ವಸ್ತು ಇವುಗಳಲ್ಲಿ ಯಾವು
ದಾದರೂ ಸ್ಪರ್ಶವಾಗಿದ್ದರೆ ಅವನು ಅಶುದ್ಧನಾಗಿದ್ದಾನೆ.
ಅವನು ಯೆಹೋವನಿಗೆ ಸೇರಿದ ಸಮಾಧಾನ ಯಜ್ಞಗಳ
ಮಾಂಸವನ್ನು ತಿಂದರೆ, ಅವನನ್ನು ಕುಲದಿಂದ ತೆಗೆದು
ಹಾಕಬೇಕು.’’

22ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
23“ಇಸ್ರೇಲರಿಗೆ ಹೀಗೆ ಹೇಳು: ನೀವು ದನಗಳ, ಕುರಿಗಳ
ಅಥವಾ ಹೋತಗಳ ಕೊಬ್ಬನ್ನು ತಿನ್ನಬಾರದು. 24ನೀವು
ತನ್ನಷ್ಟಕ್ಕೆ ತಾನೇ ಸತ್ತಪ್ರಾಣಿಯ ಅಥವಾ ಬೇರೆ ಪ್ರಾಣಿಗ
ಳಿಂದ ಕೊಲಲ್ಪಟ್ಟ ಪ್ರಾಣಿಯ ಕೊಬ್ಬನ್ನು ಬೇರೆ ಕೆಲಸಕ್ಕೆ
ಉಪಯೋಗಿಸಬಹುದು. ಆದರೆ ನೀವು ಅದನ್ನು
ಎಂದಿಗೂ ತಿನ್ನಬಾರದು. 25ಯಾವನಾದರೂ ಆಗ್ನಿಯ
ಮೂಲಕ ಯೆಹೋವನಿಗೆ ಸಮರ್ಪಣೆಯಾದ ಪಶುವಿನ
ಕೊಬ್ಬನ್ನು ತಿಂದರೆ, ಅವನನ್ನು ಅವನ ಜನರಿಂದ ತೆಗೆದು
ಹಾಕಬೇಕು. 26“ನೀವು ಎಲ್ಲಿಯೇ ವಾಸಿಸಿದರೂ,
ಯಾವುದೇ ಪಕ್ಷಿಯ ಅಥವಾ ಯಾವುದೇ ಪ್ರಾಣಿಯ ರಕ್ತ
ವನ್ನು ನೀವು ಎಂದಿಗೂ ತಿನ್ನಲೇಬಾರದು. 27ಯಾವ
ನಾದರೂ ರಕ್ತವನ್ನು ತಿಂದರೆ, ಅವನನ್ನು ಅವನ ಜನರಿಂದ
ತೆಗೆದು ಹಾಕಲ್ಪಡಬೇಕು.”

### ನೈವೇದ್ಯ ಸಮರ್ಪಣೆಯ ನಿಯಮಗಳು

28ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
29“ಇಸ್ರೇಲರಿಗೆ ಹೇಳು. ಒಬ್ಬನು ಯೆಹೋವನಿಗೆ ಸಮಾ
ಧಾನ ಯಜ್ಞಕ್ಕಾಗಿ ಪಶುವನ್ನು ತಂದರೆ, ಯೆಹೋವನಿಗೆ
ಸಲ್ಲತಕ್ಕ ಭಾಗವನ್ನು ಆತನಿಗೆ ಕೊಡಬೇಕು. 30ಕಾಣಿಕೆಯ
ಆ ಭಾಗವು ಅಗ್ನಿಯಲ್ಲಿ ಹೋಮ ಮಾಡಬೇಕು. ಅವನು
ಕಾಣಿಕೆಯನ್ನು ತೆಗೆದುಕೊಂಡು ಯೆಹೋವನ ಸನ್ನಿಧಿಗೆ
ಹೋಗಬೇಕು. ಅವನು ಆ ಪಶುವಿನ ಕೊಬ್ಬನ್ನೂ ಎದೆಯ
ಭಾಗವನ್ನೂ (ಯಾಜಕನ ಬಳಿಗೆ) ತರಬೇಕು.
ಯೆಹೋವನ ಸನ್ನಿಧಿಯಲ್ಲಿ ಎದೆಯ ಭಾಗವು ನಿವಾಳಿಸ
ಲ್ಪಡಬೇಕು. ಇದು ನೈವೇದ್ಯ ಸಮರ್ಪಣೆಯಾಗಿರುವುದು.
31ಬಳಿಕ ಯಾಜಕನು ವೇದಿಕೆಯ ಮೇಲೆ ಕೊಬ್ಬನ್ನು
ಹೋಮಮಾಡಬೇಕು. ಆದರೆ ಪಶುವಿನ ಎದೆಯ
ಭಾಗವು ಆರೋನನಿಗೂ ಅವರ ಪುತ್ರರಿಗೂ ಸೇರುವವು.
32ನೀವು ಸಮಾಧಾನ ಯಜ್ಞದ ಪಶುವಿನ ಬಲತೊಡೆ
ಯನ್ನು ಸಹ ಯಾಜಕನಿಗೆ ಕೊಡಬೇಕು. 33ಪಶುವಿನ ಬಲ
ತೊಡೆಯ ಭಾಗವು ಸಮಾಧಾನ ಯಜ್ಞದಲ್ಲಿ ರಕ್ತವನ್ನು
ಮತ್ತು ಕೊಬ್ಬನ್ನು ಸಮರ್ಪಿಸುವ ಯಾಜಕನಿಗೆ ಸೇರುತ್ತವೆ.
34ನೈವೇದ್ಯರೂಪವಾಗಿ ನಿವಾಳಿಸುವ ಸಮರ್ಪಣೆಯಲ್ಲಿ
(ಪಶುವಿನ)ಎದೆಯ ಭಾಗವನ್ನು ಮತ್ತು ಸಮಾಧಾನ
ಯಜ್ಞಗಳಲ್ಲಿ ಪಶುವಿನ ಬಲತೊಡೆಯನ್ನು ನಾನು
(ಯೆಹೋವನು) ಇಸ್ರೇಲರಿಂದ ತೆಗೆದುಕೊಂಡು
ಆರೋನನಿಗೂ ಅವನ ಪುತ್ರರಿಗೂ ಕೊಡುತ್ತಿದ್ದೇನೆ.
ಇಸ್ರೇಲರು ಈ ನಿಯಮಕ್ಕೆ ಎಂದೆಂದಿಗೂ ವಿಧೇಯರಾಗ
ಬೇಕು.”

35ಅಗ್ನಿಯ ಮೂಲಕ ಯೆಹೋವನಿಗೆ ಅರ್ಪಿಸಿದ ಸಮ
ರ್ಪಣೆಗಳಲ್ಲಿ ಇವೇ ಆರೋನನಿಗೂ ಅವನ ಪುತ್ರರಿಗೂ
ಕೊಡಲ್ಪಟ್ಟ ಭಾಗಗಳಾಗಿವೆ. ಆರೋನನೂ ಅವನ
ಪುತ್ರರೂ ಯೆಹೋವನ ಯಾಜಕರಾಗಿ* ಸೇವೆ ಮಾಡು
ವಾಗಲೆಲ್ಲಾ ಯಜ್ಞಗಳಲ್ಲಿ ಆ ಪಾಲನ್ನು ಪಡೆಯುವರು.
36ಯೆಹೋವನು ಯಾಜಕರನ್ನು ಅಭಿಷೇಕಿಸಿದ ಸಮಯ
ದಲ್ಲಿ ಆತನು ಯಾಜಕರಿಗೆ ಆ ಭಾಗಗಳನ್ನು ಕೊಡ
ಬೇಕೆಂಬುದಾಗಿ ಇಸ್ರೇಲರಿಗೆ ಆಜ್ಞಾಪಿಸಿದನು. ಜನರು
ಯಾಜಕರಿಗೆ ಆ ಭಾಗಗಳನ್ನು ಎಂದೆಂದಿಗೂ ಕೊಡ
ಬೇಕು.

37ಅವುಗಳೇ ಸರ್ವಾಂಗಹೋಮಗಳ, ಧಾನ್ಯ ಸಮರ್ಪ
ಣೆಗಳ, ಪಾಪಪರಿಹಾರಕಯಜ್ಞಗಳ, ದೋಷಪರಿಹಾರಕ
ಯಜ್ಞಗಳ, ಸಮಾಧಾನಯಜ್ಞಗಳ ಮತ್ತು ಯಾಜಕರನ್ನು
ಪ್ರತಿಷ್ಠಿಸುವ ನಿಯಮಗಳಾಗಿವೆ.

38ಯೆಹೋವನು ಮೋಶೆಗೆ ಆ ನಿಯಮಗಳನ್ನು
ಸೀನಾಯಿ ಬೆಟ್ಟದಲ್ಲಿ ಕೊಟ್ಟನು. ಇಸ್ರೇಲರು ಯೆಹೋವ
ನಿಗೆ ತಮ್ಮ ಯಜ್ಞಗಳನ್ನು ಅರ್ಪಿಸಬೇಕೆಂದು ಸೀನಾಯಿ
ಅರಣ್ಯದಲ್ಲಿ ಆಜ್ಞಾಪಿಸಿದ ದಿನದಲ್ಲಿ ಯೆಹೋವನು ಆ
ನಿಯಮಗಳನ್ನು ಕೊಟ್ಟನು.

### ಮೋಶೆಯಿಂದ ಯಾಜಕರ ಸಿದ್ಧತೆ

8 ಯೆಹೋವನು ಮೋಶೆಗೆ, 2“ಆರೋನನನ್ನೂ
ಅವನ ಪುತ್ರರನ್ನೂ ಕರೆದುಕೊಂಡು ಅವರೊಂದಿಗೆ
ಯಾಜಕ ವಸ್ತ್ರಗಳನ್ನೂ ಅಭಿಷೇಕ ತೈಲವನ್ನೂ ಪಾಪ
ಪರಿಹಾರ ಯಜ್ಞಕ್ಕಾಗಿ ಒಂದು ಹೋರಿಯನ್ನೂ ಎರಡು
ಟಗರುಗಳನ್ನೂ ಹುಳಿಯಿಲ್ಲದ ರೊಟ್ಟಿಯಿಂದ ತುಂಬಿ
ರುವ ಪುಟ್ಟಿಯನ್ನೂ ತೆಗೆದುಕೊಂಡು ಬಾ. 3ಮತ್ತು ಜನ
ರನ್ನು ಒಟ್ಟಾಗಿ ದೇವದರ್ಶನಗುಡಾರದ ಬಾಗಿಲಿಗೆ
ಎದುರಿನಲ್ಲಿ ಸೇರಿಸು” ಎಂದು ಹೇಳಿದನು.

4ಯೆಹೋವನು ಆಜ್ಞಾಪಿಸಿದ್ದನ್ನು ಮೋಶೆಯು ಮಾಡಿ
ದನು. ಜನರು ಒಟ್ಟಾಗಿ ದೇವದರ್ಶನಗುಡಾರದ ಬಾಗಿ
ಲಲ್ಲಿ ಸೇರಿಬಂದರು. 5ಆಗ ಮೋಶೆಯು ಜನರಿಗೆ,
“ನಾನು ಈಗ ಮಾಡುವ ಕಾರ್ಯವನ್ನು ಯೆಹೋವನೇ
ಆಜ್ಞಾಪಿಸಿದನು” ಎಂದು ಹೇಳಿದನು.

6ತರುವಾಯ ಮೋಶೆಯು ಆರೋನನನ್ನೂ ಅವನ
ಪುತ್ರರನ್ನೂ ಕರೆದನು. ಅವನು ಅವರಿಗೆ ನೀರಿನಿಂದ ಸ್ನಾನ
ಮಾಡಿಸಿದನು; 7ನಿಲುವಂಗಿಯನ್ನು ಆರೋನನಿಗೆ ತೊಡಿ
ಸಿದನು; ನಡುಕಟ್ಟನ್ನು ಕಟ್ಟಿದನು; ಮೇಲಂಗಿಯನ್ನು
ತೊಡಿಸಿದನು; ಏಫೋದನ್ನು ಹಾಕಿಸಿ ಕವಚದ ಮೇಲಿನ
ವಿಶೇಷವಾದ ನಡುಕಟ್ಟನ್ನು ಕಟ್ಟಿದನು; ಎದೆಕವಚವನ್ನು
ಬಿಗಿದನು. 8ಅದರೊಳಗೆ ಊರೀಮ್ ಮತ್ತು

---

**ಯಾಜಕರಾಗಿ** ಹೀಬ್ರೂವಿನಲ್ಲಿ ಇದರರ್ಥ ಬಹುಶಃ “ಆತನು ಅವರನ್ನು ಯೆಹೋವನಿಗೆ ಯಾಜಕರಾಗಿ ಸೇವೆಮಾಡಲು ನೇಮಿಸುವಾಗ” ಎಂದಿರಬಹುದು.

ತುಮ್ಮೀಮ್ * ಎಂಬ ವಸ್ತುಗಳನ್ನು ಹಾಕಿದನು. 9ಅವನ
ತಲೆಗೆ ಮುಂಡಾಸವನ್ನು ಇಟ್ಟನು; ಮುಂಡಾಸದ ಮುಂಭಾ
ಗದಲ್ಲಿ ಚಿನ್ನದ ಪಟ್ಟಿಯನ್ನು ಕಟ್ಟಿದನು. ಈ ಚಿನ್ನದ
ಪಟ್ಟಿಯು ಪವಿತ್ರ ಕಿರೀಟವಾಗಿದೆ. ಯೆಹೋವನು ಆಜ್ಞಾ
ಪಿಸಿದಂತೆಯೇ ಮೋಶೆಯು ಮಾಡಿದನು.

10ತರುವಾಯ ಮೋಶೆಯು ಅಭಿಷೇಕತೈಲವನ್ನು
ತೆಗೆದುಕೊಂಡು ಪವಿತ್ರ ಗುಡಾರದ* ಮೇಲೆ ಮತ್ತು
ಅದರಲ್ಲಿರುವ ಎಲ್ಲಾ ವಸ್ತುಗಳ ಮೇಲೆ ಚಿಮಿಕಿಸಿದನು.
ಈ ರೀತಿಯಾಗಿ ಮೋಶೆಯು ಅವುಗಳನ್ನು ಪವಿತ್ರ
ಗೊಳಿಸಿದನು.* 11ಮೋಶೆಯು ಅಭಿಷೇಕತೈಲದಲ್ಲಿ ಸ್ವಲ್ಪ
ವನ್ನು ತೆಗೆದುಕೊಂಡು ವೇದಿಕೆಯ ಮೇಲೆ ಏಳುಸಲ
ಚಿಮಿಕಿಸಿದನು. ಮೋಶೆಯು ತೈಲವನ್ನು ವೇದಿಕೆಯ
ಮೇಲೆ, ಅದರ ಎಲ್ಲಾ ಉಪಕರಣಗಳ ಮೇಲೆ ಚಿಮಿಕಿ
ಸಿದನು. ಮೋಶೆಯು ತೈಲವನ್ನು ಗಂಗಾಳ ಮತ್ತು ಅದರ
ಪೀಠದ ಮೇಲೂ ಚಿಮಿಕಿಸಿದನು. ಈ ರೀತಿಯಾಗಿ
ಮೋಶೆಯು ಅವುಗಳನ್ನು ಪವಿತ್ರಗೊಳಿಸಿದನು. 12ಬಳಿಕ
ಮೋಶೆಯು ಸ್ವಲ್ಪ ಅಭಿಷೇಕತೈಲವನ್ನು ಆರೋನನ ತಲೆಗೆ
ಹೊಯಿದನು. ಈ ರೀತಿಯಾಗಿ ಅವನು ಆರೋನನನ್ನು
ಪವಿತ್ರಗೊಳಿಸಿದನು. 13ಬಳಿಕ ಮೋಶೆಯು ಆರೋನನ
ಪುತ್ರರನ್ನು ಕರೆದುಕೊಂಡು ಬಂದು ಅವರಿಗೆ ನಿಲು
ವಂಗಿಗಳನ್ನು ತೊಡಿಸಿ ನಡುಕಟ್ಟನ್ನು ಕಟ್ಟಿದನು. ಬಳಿಕ
ಅವರ ತಲೆಗಳಿಗೆ ಮುಂಡಾಸಗಳನ್ನು ಇಟ್ಟನು.
ಯೆಹೋವನು ಆಜ್ಞಾಪಿಸಿದಂತೆಯೇ ಮೋಶೆಯು
ಮಾಡಿದನು.

14ತರುವಾಯ ಮೋಶೆಯು ಪಾಪಪರಿಹಾರಕ್ಕಾಗಿ
ಯಜ್ಞದ ಹೋರಿಯನ್ನು ತಂದನು. ಆರೋನನು ಮತ್ತು
ಅವನ ಪುತ್ರರು ಆ ಪಾಪ ಪರಿಹಾರಕ ಯಜ್ಞದ ಹೋರಿಯ
ತಲೆಯ ಮೇಲೆ ತಮ್ಮ ಕೈಗಳನ್ನು ಇಟ್ಟರು. 15ಬಳಿಕ
ಮೋಶೆಯು ಹೋರಿಯನ್ನು ವಧಿಸಿ ಅದರ ರಕ್ತವನ್ನು
ತೆಗೆದುಕೊಂಡು ಆ ರಕ್ತದಲ್ಲಿ ತನ್ನ ಬೆರಳನ್ನು ಅದ್ದಿ ವೇದಿ
ಕೆಯ ಎಲ್ಲಾ ಮೂಲೆಗಳಿಗೆ ರಕ್ತವನ್ನು ಹಚ್ಚಿದನು. ಹೀಗೆ
ಮೋಶೆಯು ವೇದಿಕೆಯನ್ನು ಯಜ್ಞಗಳಿಗಾಗಿ ಶುದ್ಧ
ಗೊಳಿಸಿ ರಕ್ತವನ್ನು ವೇದಿಕೆಯ ಬುಡದಲ್ಲಿ ಸುರಿದನು;
ಜನರನ್ನು ಶುದ್ಧಿಮಾಡುವ ಯಜ್ಞಗಳನ್ನು ಸಮರ್ಪಿಸುವು
ದಕ್ಕಾಗಿ ವೇದಿಕೆಯನ್ನು ಪ್ರತಿಷ್ಠೆಗೊಳಿಸಿದನು.
16ಮೋಶೆಯು ಹೋರಿಯ ಒಳಗಿನ ಭಾಗಗಳ
ಕೊಬ್ಬನ್ನೂ ಪಿತ್ತಾಶಯವನ್ನು ಆವರಿಸಿರುವ ಕೊಬ್ಬನ್ನೂ
ಎರಡು ಮೂತ್ರಪಿಂಡಗಳನ್ನೂ ಮತ್ತು ಅವುಗಳನ್ನು ಆವರಿ
ಸಿರುವ ಕೊಬ್ಬನ್ನೂ ತೆಗೆದುಕೊಂಡು ಅವುಗಳನ್ನು ವೇದಿ
ಕೆಯ ಮೇಲೆ ಹೋಮ ಮಾಡಿದನು. 17ಹೋರಿಯ
ಚರ್ಮ, ಅದರ ಮಾಂಸ ಮತ್ತು ಅದರ ಶರೀರದ ಕಲ್ಮಶ
ವನ್ನು ಅವನು ಪಾಳೆಯದ ಹೊರಗೆ ತೆಗೆದುಕೊಂಡು
ಹೋಗಿ ಬೆಂಕಿಯಿಂದ ಸುಟ್ಟುಹಾಕಿದನು. ಯೆಹೋವನು
ಆಜ್ಞಾಪಿಸಿದಂತೆಯೇ ಮೋಶೆಯು ಮಾಡಿದನು.

18ಬಳಿಕ ಮೋಶೆಯು ಸರ್ವಾಂಗಹೋಮದ ಟಗರನ್ನು
ತಂದನು. ಆರೋನನು ಮತ್ತು ಅವನ ಪುತ್ರರು ತಮ್ಮ
ಕೈಗಳನ್ನು ಟಗರಿನ ತಲೆಯ ಮೇಲೆ ಇಟ್ಟರು. 19ಆಗ
ಮೋಶೆಯು ಟಗರನ್ನು ವಧಿಸಿ ಅದರ ರಕ್ತವನ್ನು ವೇದಿ
ಕೆಯ ಸುತ್ತಲೂ ಚಿಮಿಕಿಸಿದನು. 20-21ಮೋಶೆಯು ಟಗ
ರನ್ನು ತುಂಡುತುಂಡಾಗಿ ಕಡಿದು ಅದರ ಒಳಗಿನ ಭಾಗ
ಗಳನ್ನು ಮತ್ತು ಕಾಲುಗಳನ್ನು ನೀರಿನಿಂದ ತೊಳೆದನು;
ಇಡೀ ಟಗರನ್ನು ವೇದಿಕೆಯ ಮೇಲೆ ಹೋಮ ಮಾಡಿ
ದನು. ಮೋಶೆಯು ಅದರ ತಲೆ, ತುಂಡುಗಳು ಮತ್ತು
ಕೊಬ್ಬನ್ನು ಹೋಮವಮಾಡಿದನು. ಅದು ಅಗ್ನಿಯ
ಮೂಲಕ ಅರ್ಪಿಸಲ್ಪಟ್ಟ ಸರ್ವಾಂಗಹೋಮವಾಗಿತ್ತು.
ಅದು ಯೆಹೋವನಿಗೆ ಸುಗಂಧಕರವಾದ ಹೋಮ
ವಾಗಿದೆ. ಯೆಹೋವನು ಆಜ್ಞಾಪಿಸಿದಂತೆಯೇ
ಮೋಶೆಯು ಮಾಡಿದನು.

22ಬಳಿಕ ಮೋಶೆಯು ಆರೋನನನ್ನೂ ಅವನ ಪುತ್ರ
ರನ್ನೂ ಯಾಜಕರನ್ನಾಗಿ ನೇಮಿಸುವುದಕ್ಕೆ ವಧಿಸಬೇಕಾದ
ಎರಡನೆಯ ಟಗರನ್ನು ತಂದನು. ಆರೋನನೂ ಅವನ
ಪುತ್ರರೂ ತಮ್ಮ ಕೈಗಳನ್ನು ಟಗರಿನ ತಲೆಯ ಮೇಲೆ
ಇಟ್ಟರು. 23ಆಗ ಮೋಶೆ ಟಗರನ್ನು ವಧಿಸಿ ಅದರ ಸ್ವಲ್ಪ
ರಕ್ತವನ್ನು ಆರೋನನ ಬಲಕಿವಿಯ ತುದಿಗೂ ಅವನ
ಬಲಗೈಯ ಹೆಬ್ಬೆರಳಿಗೂ ಅವನ ಬಲಗಾಲಿನ ಹೆಬ್ಬೆಟ್ಟಿಗೂ
ಹಚ್ಚಿದನು. 24ಬಳಿಕ ಮೋಶೆಯು ಆರೋನನ ಪುತ್ರರನ್ನು
ವೇದಿಕೆಯ ಸಮೀಪಕ್ಕೆ ಕರೆಸಿ ಸ್ವಲ್ಪ ರಕ್ತವನ್ನು ಅವರ ಬಲ
ಗಿವಿಗಳ ತುದಿಗೂ ಅವರ ಬಲಗೈಗಳ ಹೆಬ್ಬೆರಳಿಗೂ ಮತ್ತು
ಅವರ ಬಲಗಾಲುಗಳ ಹೆಬ್ಬೆಟ್ಟಿಗೂ ಹಚ್ಚಿದನು; ರಕ್ತವನ್ನು
ವೇದಿಕೆಯ ಸುತ್ತಲೂ ಚಿಮಿಕಿಸಿದನು; 25ಕೊಬ್ಬನ್ನು
ಅಂದರೆ ಬಾಲದ ಮೇಲಿರುವ ಕೊಬ್ಬನ್ನೂ ಒಳಗಿನ
ಭಾಗಗಳ ಮೇಲಿರುವ ಕೊಬ್ಬೆಲ್ಲವನ್ನೂ ಪಿತ್ತಾಶಯವನ್ನು
ಆವರಿಸಿರುವ ಕೊಬ್ಬನ್ನೂ ಎರಡು ಮೂತ್ರಪಿಂಡಗಳನ್ನೂ
ಅವುಗಳ ಮೇಲಿರುವ ಕೊಬ್ಬನ್ನೂ ಮತ್ತು ಬಲ ತೊಡೆ
ಯನ್ನೂ ತೆಗೆದುಕೊಂಡನು. 26ಪ್ರತಿದಿನ ಯೆಹೋವನ
ಸನ್ನಿಧಿಯಲ್ಲಿ ಹುಳಿಯಿಲ್ಲದ ರೊಟ್ಟಿಯ ಪುಟ್ಟಿಯು ಇಡ
ಲ್ಪಡುತ್ತಿತ್ತು. ಮೋಶೆಯು ರೊಟ್ಟಿಯಲ್ಲಿ ಒಂದು
ತುಂಡನ್ನು ಎಣ್ಣೆ ಬೆರಸಿದ ರೊಟ್ಟಿಯಲ್ಲಿ ಒಂದು ತುಂಡನ್ನು

---

**ಊರೀಮ್ ಮತ್ತು ತುಮ್ಮೀಮ್** ಪ್ರಶ್ನೆಗಳಿಗೆ ದೇವರ ಉತ್ತರವನ್ನು ಕಂಡುಕೊಳ್ಳಲು ಯಾಜಕರು ಇವುಗಳನ್ನು ಉಪಯೋಗಿಸುತ್ತಿದ್ದರು. ಚೀಟುಹಾಕಿ ನಿರ್ಣಯ ಮಾಡುವಂತೆ ಅವುಗಳನ್ನು ಬಳಸಲಾಗುತ್ತಿತ್ತು.

**ಪವಿತ್ರ ಗುಡಾರ** ‘‘ದೇವದರ್ಶನಗುಡಾರ’’ ತನ್ನ ಜನರೊಡನೆ ಇರಲು ದೇವರು ಬಂದ ಸ್ಥಳವಿದು.

**ಪವಿತ್ರಗೊಳಿಸಿದನು** ಅಕ್ಷರಶಃ ‘‘ಪ್ರತಿಷ್ಠಿಸಿದನು’’

ಹುಳಿಯಿಲ್ಲದ ಒಂದು ಕಡುಬನ್ನೂ ತೆಗೆದುಕೊಂಡನು.
ಮೋಶೆಯು ಆ ರೊಟ್ಟಿಯ ತುಂಡುಗಳನ್ನು ಕೊಬ್ಬು
ಮತ್ತು ಟಗರಿನ ಬಲತೊಡೆಯ ಒಟ್ಟಿಗೆ ಇಟ್ಟನು. 27ಬಳಿಕ
ಮೋಶೆಯು ಅವೆಲ್ಲವುಗಳನ್ನು ಆರೋನನ ಮತ್ತು ಅವನ
ಪುತ್ರರ ಕೈಗಳಲ್ಲಿ ಇಟ್ಟನು. ಮೋಶೆಯು ತುಂಡುಗಳನ್ನು
ಯೆಹೋವನ ಸನ್ನಿಧಿಯಲ್ಲಿ ನೈವೇದ್ಯವಾಗಿ ನಿವಾಳಿಸಿ
ದನು. 28ಬಳಿಕ ಮೋಶೆಯು ಆರೋನನ ಮತ್ತು ಅವನ
ಪುತ್ರರ ಕೈಗಳಲ್ಲಿರುವ ಈ ವಸ್ತುಗಳನ್ನು ತೆಗೆದುಕೊಂಡನು.
ಮೋಶೆಯು ಅವುಗಳನ್ನು ವೇದಿಕೆಯಲ್ಲಿ ಸರ್ವಾಂಗ
ಹೋಮದ ಮೇಲಿಟ್ಟು ಅವುಗಳನ್ನು ಹೋಮ ಮಾಡಿ
ದನು. ಅದು ಆರೋನನನ್ನೂ ಅವನ ಪುತ್ರರನ್ನೂ ಯಾಜ
ಕರನ್ನಾಗಿ ನೇಮಿಸುವ ಸಮರ್ಪಣೆಯಾಗಿತ್ತು. ಹೋಮ
ವಾಗಿ ಅರ್ಪಿಸಲ್ಪಟ್ಟ ಈ ಯಜ್ಞವು ಯೆಹೋವನಿಗೆ
ಸುಗಂಧಕರವಾಗಿದೆ. 29ಮೋಶೆಯು ಎದೆಯ ಭಾಗವನ್ನು
ತೆಗೆದುಕೊಂಡು ಯೆಹೋವನ ಮುಂದೆ ನೈವೇದ್ಯವಾಗಿ
ನಿವಾಳಿಸಿದನು. ಅದು ಯಾಜಕರನ್ನು ನೇಮಿಸುವುದಕ್ಕಾಗಿ
ಅರ್ಪಿಸಲ್ಪಟ್ಟ ಟಗರಿನಲ್ಲಿ ಮೋಶೆಯ ಪಾಲಾಗಿತ್ತು.
ಯೆಹೋವನು ಆಜ್ಞಾಪಿಸಿದಂತೆಯೇ ಮೋಶೆಯು
ಮಾಡಿದನು. 30ಮೋಶೆಯು ಸ್ವಲ್ಪ ಅಭಿಷೇಕತೈಲವನ್ನು
ಮತ್ತು ವೇದಿಕೆಯ ಮೇಲಿದ್ದ ರಕ್ತದಲ್ಲಿ ಸ್ವಲ್ಪವನ್ನು ತೆಗೆದು
ಕೊಂಡು ಆರೋನನ ಮೇಲೆ ಮತ್ತು ಅವನ ಯಾಜಕ
ವಸ್ತ್ರದ ಮೇಲೆ ಚಿಮಿಕಿಸಿದನು; ಆರೋನನ ಜೊತೆ ಇದ್ದ
ಅವನ ಪುತ್ರರ ಮೇಲೆ ಮತ್ತು ಅವರ ಬಟ್ಟೆಗಳ ಮೇಲೆ
ಚಿಮಿಕಿಸಿದನು. ಹೀಗೆ ಮೋಶೆಯು ಆರೋನನನ್ನೂ
ಅವನ ಯಾಜಕವಸ್ತ್ರವನ್ನೂ ಅವನ ಪುತ್ರರನ್ನೂ ಅವರ
ಯಾಜಕ ವಸ್ತ್ರಗಳನ್ನೂ ಪವಿತ್ರಗೊಳಿಸಿದನು.*

31ತರುವಾಯ ಮೋಶೆಯು ಆರೋನನಿಗೂ ಅವನ
ಪುತ್ರರಿಗೂ ಹೀಗೆ ಹೇಳಿದನು: ‘‘ನೀವು ಮಾಂಸವನ್ನು
ದೇವದರ್ಶನಗುಡಾರದ ಬಾಗಿಲಲ್ಲಿ ಬೇಯಿಸಿ ತಿನ್ನ
ಬೇಕು. ಪ್ರತಿಷ್ಠೆಕಾಣಿಕೆಯ ಬುಟ್ಟಿಯಲ್ಲಿರುವ ರೊಟ್ಟಿ
ಯೊಡನೆ (ಯಾಜಕರನ್ನು ನೇಮಕ ಮಾಡುವ ಆಚಾರಕ್ಕೆ
ತಕ್ಕಂತೆ) ಅದನ್ನು ಅಲ್ಲಿ ತಿನ್ನಿರಿ. ಮಾಂಸವನ್ನೂ ರೊಟ್ಟಿ
ಯನ್ನೂ ಆ ಸ್ಥಳದಲ್ಲಿ ತಿನ್ನಿರಿ. ನಾನು ಹೇಳುವ ಹಾಗೆ
ಇದನ್ನು ಮಾಡಿರಿ. 32ಮಾಂಸವಾಗಲೀ ರೊಟ್ಟಿಯಾಗಲೀ
ಉಳಿದರೆ ಆಗ ಅದನ್ನು ಸುಟ್ಟುಹಾಕಿರಿ. 33ಯಾಜಕರಾಗಿ
ಪ್ರತಿಷ್ಠಿಸುವ ಆಚಾರ ವಿಧಿಯು ಏಳು ದಿನಗಳವರೆಗೆ ಇರು
ವುದು. ಆ ಸಮಯ ಮುಗಿಯುವವರೆಗೆ ನೀವು ದೇವ
ದರ್ಶನ ಗುಡಾರದ ಬಾಗಿಲನ್ನು ಬಿಟ್ಟು ಹೋಗಬಾರದು.
34ಈ ದಿನದಲ್ಲಿ ಮಾಡಿದ ಸಕಲಕಾರ್ಯಗಳನ್ನು ಏಳು
ದಿನವೂ ಮಾಡಬೇಕು. 35ನೀವು ಏಳು ದಿನಗಳು ಹಗಲು
ರಾತ್ರಿ ದೇವದರ್ಶನಗುಡಾರದ ಬಾಗಿಲಿನಲ್ಲಿ ಇರಬೇಕು.
ನೀವು ಯೆಹೋವನ ಆಜ್ಞೆಗಳಿಗೆ ವಿಧೇಯರಾಗದಿದ್ದರೆ
ಸಾಯುವಿರಿ! ಯೆಹೋವನು ಆ ಆಜ್ಞೆಗಳನ್ನು ನನಗೆ
ಕೊಟ್ಟನು.’’

36ಆದ್ದರಿಂದ ಯೆಹೋವನು ಮೋಶೆಯ ಮೂಲಕ
ಆಜ್ಞಾಪಿಸಿದ ಎಲ್ಲಾ ಕಾರ್ಯಗಳನ್ನು ಆರೋನನೂ ಅವನ
ಪುತ್ರರೂ ಮಾಡಿದರು.

## ದೇವರು ಯಾಜಕರನ್ನು ಸ್ವೀಕರಿಸಿದನು

9 ಎಂಟನೆಯ ದಿನದಲ್ಲಿ ಮೋಶೆಯು ಆರೋನನನ್ನೂ
ಅವನ ಪುತ್ರರನ್ನೂ ಕರೆದನು. ಅವನು ಇಸ್ರೇಲರ
ಹಿರಿಯರನ್ನು ಕರೆದನು. 2ಮೋಶೆಯು ಆರೋನನಿಗೆ
ಹೀಗಂದನು: ‘‘ಒಂದು ಎಳೆಹೋರಿಯನ್ನೂ ಒಂದು ಟಗ
ರನ್ನೂ ತೆಗೆದುಕೊ. ಆ ಪಶುಗಳಲ್ಲಿ ಏನೂ ದೋಷವಿರ
ಬಾರದು. ಹೋರಿಯನ್ನು ಪಾಪಪರಿಹಾರಕ ಯಜ್ಞ
ವಾಗಿಯೂ ಟಗರನ್ನು ಸರ್ವಾಂಗಹೋಮವಾಗಿಯೂ
ಯೆಹೋವನಿಗೆ ಸಮರ್ಪಿಸು. 3ಇಸ್ರೇಲರಿಗೆ ಹೀಗೆ ಹೇಳು:
‘ಪಾಪಪರಿಹಾರಕ ಯಜ್ಞಕ್ಕಾಗಿ ಹೋತವನ್ನು ತೆಗೆದು
ಕೊಳ್ಳಿರಿ; ಸರ್ವಾಂಗಹೋಮಕ್ಕಾಗಿ ಕರುವನ್ನೂ ಕುರಿ
ಮರಿಯನ್ನೂ ತೆಗೆದುಕೊಳ್ಳಿರಿ. ಕರುವೂ ಕುರಿಮರಿಯೂ
ಒಂದು ವರ್ಷದ್ದಾಗಿರಬೇಕು, ಆ ಪ್ರಾಣಿಗಳಲ್ಲಿ ಯಾವ
ದೋಷವಿರಬಾರದು. 4ಸಮಾಧಾನ ಯಜ್ಞಕ್ಕಾಗಿ ಒಂದು
ಹೋರಿಯನ್ನೂ ಒಂದು ಟಗರನ್ನೂ ತೆಗೆದುಕೊಂಡು
ಎಣ್ಣೆ ಬೆರೆಸಿದ ಧಾನ್ಯ ಸಮರ್ಪಣೆಗಳೊಡನೆ ಅವುಗಳನ್ನು
ಯೆಹೋವನ ಮುಂದೆ ಅರ್ಪಿಸಿರಿ. ಯಾಕಂದರೆ ಈ ದಿನ
ಯೆಹೋವನು ನಿಮಗೆ ಪ್ರತ್ಯಕ್ಷವಾಗುವನು.’’

5ಆದ್ದರಿಂದ ಜನರೆಲ್ಲರೂ ದೇವದರ್ಶನಗುಡಾರಕ್ಕೆ
ಬಂದರು. ಮೋಶೆಯು ಆಜ್ಞಾಪಿಸಿದ ವಸ್ತುಗಳನ್ನು
ಅವರು ತಂದರು. ಎಲ್ಲಾ ಜನರು ಯೆಹೋವನ ಸನ್ನಿಧಿ
ಯಲ್ಲಿ ನಿಂತರು. 6ಮೋಶೆಯು, ‘‘ಯೆಹೋವನು ಆಜ್ಞಾ
ಪಿಸಿದವುಗಳನ್ನು ನೀವು ಮಾಡಿದರೆ ಯೆಹೋವನ
ಮಹಿಮೆಯು ನಿಮಗೆ ಪ್ರತ್ಯಕ್ಷವಾಗುವುದು’’ ಎಂದು
ಹೇಳಿದನು.

7ಬಳಿಕ ಮೋಶೆಯು ಆರೋನನಿಗೆ, ‘‘ಯೆಹೋವನು
ಆಜ್ಞಾಪಿಸಿದವುಗಳನ್ನು ಮಾಡು. ಯಜ್ಞವೇದಿಕೆಯ ಬಳಿಗೆ
ಹೋಗಿ ಪಾಪಪರಿಹಾರ ಯಜ್ಞವನ್ನೂ ಸರ್ವಾಂಗ
ಹೋಮವನ್ನೂ ಅರ್ಪಿಸು. ನಿನ್ನನ್ನೂ ಜನರನ್ನೂ ಶುದ್ಧಿ
ಮಾಡುವ ಆ ಕಾರ್ಯಗಳನ್ನು ಮಾಡು. ಜನರು ತಂದ
ದ್ದನ್ನು ತೆಗೆದುಕೊಂಡು ಅವರಿಗಾಗಿ ಪಾಪಪರಿಹಾರಕ
ಯಜ್ಞವನ್ನು ಅರ್ಪಿಸಿ ಅವರನ್ನು ಶುದ್ಧಿಮಾಡು’’ ಎಂದು
ಹೇಳಿದನು.

8ಆದ್ದರಿಂದ ಆರೋನನು ಯಜ್ಞವೇದಿಕೆಯ ಬಳಿಗೆ
ಹೋದನು. ಅವನು ತನಗೋಸ್ಕರ ಪಾಪಪರಿಹಾರಕ

---

**ಪವಿತ್ರಗೊಳಿಸಿದನು** ಅಕ್ಷರಶಃ, ‘‘ಪ್ರತಿಷ್ಠಿಸಿದನು.’’

ಯಜ್ಞವಾಗಿ ಎಳೆ ಹೋರಿಯನ್ನು ವಧಿಸಿದನು.
[9]ಆರೋನನ ಪುತ್ರರು ರಕ್ತವನ್ನು ಆರೋನನ ಬಳಿಗೆ
ತಂದರು. ಆರೋನನು ತನ್ನ ಬೆರಳನ್ನು ರಕ್ತದಲ್ಲಿ ಅದ್ದಿ
ಯಜ್ಞವೇದಿಕೆಯ ಮೂಲೆಗಳಿಗೆ ಹಚ್ಚಿದನು. ಬಳಿಕ
ಆರೋನನು ರಕ್ತವನ್ನು ಯಜ್ಞವೇದಿಕೆಯ ಬುಡದಲ್ಲಿ
ಸುರಿದನು. [10]ಆರೋನನು ಪಾಪಪರಿಹಾರಕ ಯಜ್ಞ
ಪಶುವಿನ ಕೊಬ್ಬನ್ನು, ಮೂತ್ರಪಿಂಡಗಳನ್ನು ಮತ್ತು
ಪಿತ್ತಾಶಯವನ್ನು ಆವರಿಸಿರುವ ಕೊಬ್ಬನ್ನು ತೆಗೆದು
ಕೊಂಡನು. ಅವನು ಆ ವಸ್ತುಗಳನ್ನು ವೇದಿಕೆಯ ಮೇಲೆ
ಹೋಮಮಾಡಿದನು. ಯೆಹೋವನು ಮೋಶೆಗೆ ಆಜ್ಞಾಪಿ
ಸಿದಂತೆಯೇ ಅವನು ಮಾಡಿದನು. [11]ಬಳಿಕ ಆರೋನನು
ಮಾಂಸವನ್ನು ಮತ್ತು ಚರ್ಮವನ್ನು ಪಾಳೆಯದ ಹೊರಗೆ
ಬೆಂಕಿಯಲ್ಲಿ ಸುಟ್ಟುಹಾಕಿದನು.

[12]ನಂತರ ಆರೋನನು ಸರ್ವಾಂಗಹೋಮದ ಪಶು
ವನ್ನು ವಧಿಸಿದನು. ಆರೋನನ ಪುತ್ರರು ರಕ್ತವನ್ನು
ಆರೋನನ ಬಳಿಗೆ ತಂದರು. ಆರೋನನು ರಕ್ತವನ್ನು
ವೇದಿಕೆಯ ಸುತ್ತಲೂ ಚಿಮಿಕಿಸಿದನು. [13]ಆರೋನನ
ಪುತ್ರರು ಸರ್ವಾಂಗಹೋಮದ ಪಶುವಿನ ಮಾಂಸದ
ತುಂಡುಗಳನ್ನು ಮತ್ತು ತಲೆಯನ್ನು ಆರೋನನಿಗೆ
ಕೊಟ್ಟರು. ಬಳಿಕ ಆರೋನನು ಅವುಗಳನ್ನು ವೇದಿಕೆಯ
ಮೇಲೆ ಹೋಮಮಾಡಿದನು. [14]ಆರೋನನು ಸರ್ವಾಂಗ
ಹೋಮದ ಪಶುವಿನ ಒಳಗಿನ ಭಾಗಗಳನ್ನೂ ಕಾಲು
ಗಳನ್ನೂ ತೊಳೆದು ಅವುಗಳನ್ನು ವೇದಿಕೆಯ ಮೇಲೆ
ಹೋಮಮಾಡಿದನು.

[15]ತರುವಾಯ ಆರೋನನು ಜನರು ಅರ್ಪಿಸುವ ಪಶು
ಗಳನ್ನು ತರಿಸಿದನು. ಅವನು ಜನರಿಗಾಗಿ ಪಾಪಪರಿಹಾರಕ
ಯಜ್ಞಕ್ಕಾಗಿ ಹೋತವನ್ನು ವಧಿಸಿದನು. ಅವನು ಮೊದ
ಲಿನ ಪಶುವನ್ನು ಸಮರ್ಪಿಸಿದ ರೀತಿಯಲ್ಲಿ ಪಾಪ
ಪರಿಹಾರದ ಹೋತವನ್ನು ಸಮರ್ಪಿಸಿದನು.
[16]ಆರೋನನು ಸರ್ವಾಂಗಹೋಮಕ್ಕಾಗಿ ಪಶುವನ್ನು
ತರಿಸಿ ಯೆಹೋವನು ಆಜ್ಞಾಪಿಸಿದಂತೆಯೇ ಅರ್ಪಿಸಿದನು.
[17]ಆರೋನನು ಧಾನ್ಯ ನೈವೇದ್ಯವನ್ನು ಯಜ್ಞವೇದಿಕೆಯ
ಬಳಿಗೆ ತಂದನು. ಅವನು ಒಂದು ಹಿಡಿ ಧಾನ್ಯವನ್ನು ತೆಗೆದು
ಕೊಂಡು ದಿನಂಪ್ರತಿ ಹೊತ್ತಾರೆಯ ವೇಳೆಯಲ್ಲಿ
ಅರ್ಪಿಸುವ ಯಜ್ಞವಲ್ಲದೆ ಇದನ್ನೂ ಕೂಡ ಅರ್ಪಿಸಿದನು.

[18]ಆರೋನನು ಜನರಿಗಾಗಿ ಸಮಾಧಾನಯಜ್ಞವಾದ
ಹೋರಿಯನ್ನೂ ಟಗರನ್ನೂ ವಧಿಸಿದನು. ಆರೋನನ
ಪುತ್ರರು ರಕ್ತವನ್ನು ಆರೋನನ ಬಳಿಗೆ ತಂದರು.
ಆರೋನನು ಈ ರಕ್ತವನ್ನು ಯಜ್ಞವೇದಿಕೆಯ ಸುತ್ತಲೂ
ಚಿಮಿಕಿಸಿದನು. [19]ಆರೋನನ ಪುತ್ರರು ಹೋರಿಯ
ಮತ್ತು ಟಗರಿನ ಕೊಬ್ಬನ್ನು ಆರೋನನ ಬಳಿಗೆ ತಂದರು.
ಇವರು ಬಾಲದ ಕೊಬ್ಬನ್ನೂ ಒಳಗಿನ ಭಾಗಗಳನ್ನು
ಆವರಿಸಿರುವ ಕೊಬ್ಬನ್ನೂ ಮೂತ್ರಪಿಂಡಗಳನ್ನೂ ಪಿತ್ತಾಶ
ಯವನ್ನೂ ಆವರಿಸಿರುವ ಕೊಬ್ಬನ್ನೂ ತಂದರು. [20]ಅವರು
ಈ ಕೊಬ್ಬಿನ ಭಾಗಗಳನ್ನು ಹೋರಿಯ ಮತ್ತು ಟಗರಿನ
ಎದೆಯ ಭಾಗಗಳ ಮೇಲೆ ಇಟ್ಟರು. ಆರೋನನು ಅವೆಲ್ಲ
ವನ್ನು ಯಜ್ಞವೇದಿಕೆಯ ಮೇಲೆ ಹೋಮಮಾಡಿದನು.
[21]ಮೋಶೆಯು ಆಜ್ಞಾಪಿಸಿದಂತೆ ಎದೆಯ ಭಾಗಗಳನ್ನು
ಮತ್ತು ಬಲತೊಡೆಯನ್ನು ಆರೋನನು ಯೆಹೋವನ
ಸನ್ನಿಧಿಯಲ್ಲಿ ನೈವೇದ್ಯವಾಗಿ ನಿವಾಳಿಸಿದನು.

[22]ತರುವಾಯ ಆರೋನನು ತನ್ನ ಕೈಗಳನ್ನು ಜನರ
ಕಡೆಗೆ ಎತ್ತಿ ಅವರನ್ನು ಆಶೀರ್ವದಿಸಿದನು. ಆರೋನನು
ಪಾಪಪರಿಹಾರಕ ಯಜ್ಞವನ್ನೂ ಸರ್ವಾಂಗ ಹೋಮ
ವನ್ನೂ ಮತ್ತು ಸಮಾಧಾನ ಯಜ್ಞವನ್ನೂ ಅರ್ಪಿಸಿ ಮುಗಿ
ಸಿದ ನಂತರ ಯಜ್ಞವೇದಿಕೆಯಿಂದ ಕೆಳಗಿಳಿದು ಬಂದನು.
[23]ಮೋಶೆಯು ಮತ್ತು ಆರೋನನು ದೇವದರ್ಶನದ
ಗುಡಾರದೊಳಗೆ ಹೋದರು. ಅವರು ಹೊರಗೆ ಬಂದು
ಜನರನ್ನು ಆಶೀರ್ವದಿಸಿದರು. ಆಗ ಯೆಹೋವನ ಮಹಿ
ಮೆಯು ಜನರೆಲ್ಲರಿಗೆ ಪ್ರತ್ಯಕ್ಷವಾಯಿತು. [24]ಯೆಹೋವನ
ಬಳಿಯಿಂದ ಬೆಂಕಿಯು ಬಂದು ವೇದಿಕೆಯ ಮೇಲಿದ್ದ
ಸರ್ವಾಂಗಹೋಮವನ್ನು ಮತ್ತು ಕೊಬ್ಬನ್ನು ದಹಿಸಿ
ಬಿಟ್ಟಿತು. ಜನರೆಲ್ಲರೂ ಇದನ್ನು ನೋಡಿದಾಗ, ಅವರು
ಆನಂದದಿಂದ ಆರ್ಭಟಿಸಿ ಅಡ್ಡಬಿದ್ದು ನಮಸ್ಕರಿಸಿದರು.

### ಆರೋನನ ಪುತ್ರರ ಸಾವು

10 ತರುವಾಯ ಆರೋನನ ಪುತ್ರರಲ್ಲಿ ನಾದಾಬ್
ಮತ್ತು ಅಬೀಹು ಎಂಬಿಬ್ಬರು ಧೂಪ ಹಾಕಲು
ಒಂದೊಂದು ಬಟ್ಟಲನ್ನು ತೆಗೆದುಕೊಂಡು ಬೇರೆ ಬೆಂಕಿ
ಯನ್ನಿಟ್ಟು ಯೆಹೋವನ ಮುಂದೆ ಧೂಪಹಾಕಿದರು.
ಯೆಹೋವನ ಆಜ್ಞೆಗನುಸಾರವಾದ ಬೆಂಕಿಯನ್ನು ಅವರು
ಉಪಯೋಗಿಸಲಿಲ್ಲ. [2]ಆದ್ದರಿಂದ ಯೆಹೋವನಿಂದ
ಬೆಂಕಿ ಹೊರಟು ಬಂದು ಅವರಿಬ್ಬರನ್ನು ನಾಶಮಾಡಿತು.
ಅವರು ಯೆಹೋವನ ಸನ್ನಿಧಿಯಲ್ಲಿ ಸತ್ತರು.

[3]ಆಗ ಮೋಶೆ ಆರೋನನಿಗೆ, ‘‘ಯೆಹೋವನು ಹೇಳು
ವುದೇನೆಂದರೆ, ‘ನನ್ನ ಬಳಿಗೆ ಬರುವ ಯಾಜಕರು ನನ್ನನ್ನು
ಗೌರವಿಸಬೇಕು. ಯಾಕಂದರೆ ನಾನು ಅವರ ಮೂಲಕ
ಜನರಿಗೆ ಪ್ರಕಟಿಸಿಕೊಳ್ಳುವೆನು. ನಾನು ಪರಿಶುದ್ಧನೆಂದು
ಅವರು ಮತ್ತು ಎಲ್ಲಾ ಜನರು ತಿಳಿದುಕೊಂಡು ನನ್ನನ್ನು
ಘನಪಡಿಸಬೇಕು’’’ ಎಂದು ಹೇಳಿದನು. ಆದ್ದರಿಂದ
ಆರೋನನು (ತನ್ನ ಪುತ್ರರು ಸತ್ತಿದ್ದರ ಬಗ್ಗೆ) ಏನೂ
ಹೇಳದೆ ಸುಮ್ಮನಿದ್ದನು.

[4]ಆರೋನನ ಚಿಕ್ಕಪ್ಪನಾದ ಉಜ್ಜೀಯೇಲನಿಗೆ ಇಬ್ಬರು
ಗಂಡು ಮಕ್ಕಳಿದ್ದರು. ಅವರ ಹೆಸರು ಮಿಶಾಯೇಲ್
ಮತ್ತು ಎಲ್ಸಾಫಾನ್. ಮೋಶೆಯು ಆ ಪುತ್ರರಿಗೆ, ‘‘ಪವಿತ್ರ

ಸ್ಥಳದ ಮುಂದೆ ಬಿದ್ದಿರುವ ನಿಮ್ಮ ಸಹೋದರರ ಮೃತ
ಶರೀರಗಳನ್ನು ಪಾಳೆಯದ ಹೊರಗೆ ತೆಗೆದುಕೊಂಡು
ಹೋಗಿರಿ'' ಎಂದು ಹೇಳಿದನು.
5ಮಿಶಾಯೇಲ ಮತ್ತು ಎಲ್ಸಾಫಾನ ಮೋಶೆಯ
ಮಾತಿಗೆ ವಿಧೇಯರಾದರು. ಅವರು ನಾದಾಬ್ ಮತ್ತು
ಅಬೀಹು ಎಂಬವರ ಮೃತಶರೀರಗಳನ್ನು ಪಾಳೆಯದ
ಹೊರಗೆ ತೆಗೆದುಕೊಂಡು ಹೋದರು. ನಾದಾಬ್ ಮತ್ತು
ಅಬೀಹು ತೊಟ್ಟುಕೊಂಡಿದ್ದ ವಿಶೇಷವಾದ ಹೆಣೆದ ಅಂಗಿ
ಗಳು ಇನ್ನೂ ಅವರ ಮೃತಶರೀರಗಳ ಮೇಲಿದ್ದವು.
6ಬಳಿಕ ಮೋಶೆ ಆರೋನನೊಡನೆ ಮತ್ತು ಅವನ ಪುತ್ರ
ರಾದ ಎಲ್ಲಾಜಾರ್ ಮತ್ತು ಈತಾಮಾರ್ ಇವರೊಡನೆ
ಮಾತಾಡಿದನು. ಮೋಶೆಯು ಅವರಿಗೆ, ''ನೀವು ದುಃಖ
ದಿಂದ ನಿಮ್ಮ ತಲೆಕೂದಲನ್ನು ಕೆದರಿಕೊಳ್ಳಬೇಡಿರಿ; ನಿಮ್ಮ
ಬಟ್ಟೆಗಳನ್ನು ಹರಿದುಕೊಳ್ಳಬೇಡಿರಿ. ಇಲ್ಲವಾದರೆ ನೀವೂ
ಕೊಲ್ಲಲ್ಪಡುವಿರಿ. ಅಲ್ಲದೆ ಯೆಹೋವನು ಜನರೆಲ್ಲರ
ಮೇಲೆ ಕೋಪಗೊಳ್ಳುವನು. ಇಸ್ರೇಲರೆಲ್ಲರೂ ನಿಮ್ಮ
ಬಂಧುಗಳು. ಯೆಹೋವನು ನಾದಾಬ್ ಮತ್ತು ಅಬೀಹು
ಅವರನ್ನು ಸುಟ್ಟುಹಾಕಿದ್ದರ ಬಗ್ಗೆ ಅವರು ದುಃಖಿಸ
ಬಹುದು. 7ಆದರೆ ನೀವು ದೇವದರ್ಶನಗುಡಾರದ ಬಾಗಿ
ಲನ್ನು ಸಹ ಬಿಟ್ಟು ಹೋಗಬಾರದು. ಇಲ್ಲವಾದರೆ ನೀವು
ಸಾಯುವಿರಿ! ಯಾಕಂದರೆ, ಯೆಹೋವನ ಅಭಿಷೇಕ
ತೈಲವು ನಿಮ್ಮ ಮೇಲಿದೆ'' ಎಂದು ಹೇಳಿದನು. ಆದ್ದರಿಂದ
ಆರೋನ, ಎಲ್ಲಾಜಾರ್ ಮತ್ತು ಈತಾಮಾರ್
ಮೋಶೆಯ ಮಾತಿಗೆ ವಿಧೇಯರಾದರು.
8ಬಳಿಕ ಯೆಹೋವನು ಆರೋನನಿಗೆ, 9''ನೀನು
ಮತ್ತು ನಿನ್ನ ಪುತ್ರರು ದೇವದರ್ಶನಗುಡಾರದೊಳಗೆ
ಬರುವಾಗ ದ್ರಾಕ್ಷಾರಸವನ್ನಾಗಲೀ ಮದ್ಯವನ್ನಾಗಲೀ
ಕುಡಿಯಬಾರದು. ನೀವು ಅವುಗಳನ್ನು ಕುಡಿದರೆ ಸಾಯು
ವಿರಿ. ಈ ಕಟ್ಟಳೆಯು ನಿಮ್ಮ ಸಂತತಿಯವರಿಗೆ ಶಾಶ್ವತ
ವಾಗಿದೆ. 10ನೀವು ಪವಿತ್ರವಾದವುಗಳ ಮತ್ತು ಪವಿತ್ರ
ವಲ್ಲದ ವಸ್ತುಗಳ ಕುರಿತಾಗಿಯೂ ಶುದ್ಧವಾದವುಗಳ
ಮತ್ತು ಅಶುದ್ಧವಾದವುಗಳ ಕುರಿತಾಗಿಯೂ ಸ್ಪಷ್ಟವಾಗಿ
ವಿವೇಚನೆಯುಳ್ಳವರಾಗಿರಬೇಕು. 11ಯೆಹೋವನು
ಮೋಶೆಯ ಮೂಲಕ ಇಸ್ರೇಲ ಜನರಿಗೆ ಕೊಟ್ಟ ಎಲ್ಲಾ
ಕಟ್ಟಳೆಗಳನ್ನು ಅವರಿಗೆ ಬೋಧಿಸುವುದು ನಿನ್ನ ಜವಾಬ್ದಾರಿ
ಯಾಗಿದೆ'' ಎಂದು ಹೇಳಿದನು.
12ಆರೋನನಿಗೆ ಇನ್ನೂ ಜೀವಂತವಾಗಿದ್ದ ಎಲ್ಲಾಜಾರ್
ಮತ್ತು ಈತಾಮಾರ್ ಎಂಬ ಇಬ್ಬರು ಪುತ್ರರು ಇದ್ದರು.
ಮೋಶೆಯು ಆರೋನನಿಗೆ ಮತ್ತು ಅವನ ಇಬ್ಬರು
ಗಂಡುಮಕ್ಕಳಿಗೆ, ''ಯಜ್ಞವೇದಿಕೆಯ ಮೇಲೆ ಅರ್ಪಿಸಿದ
ಯಜ್ಞಗಳಲ್ಲಿಯೂ ಧಾನ್ಯ ನೈವೇದ್ಯದಲ್ಲಿಯೂ ಉಳಿದ
ಭಾಗವನ್ನು ತೆಗೆದುಕೊಂಡು ನೀವು ತಿನ್ನಬೇಕು. ಆದರೆ
ನೀವು ಅದಕ್ಕೆ ಹುಳಿಯನ್ನು ಸೇರಿಸದೆ ಯಜ್ಞವೇದಿಕೆಯ
ಸಮೀಪದಲ್ಲಿಯೇ ತಿನ್ನಬೇಕು. ಯಾಕಂದರೆ ಆ ಸಮ
ರ್ಪಣೆಯು ಬಹಳ ಪವಿತ್ರವಾಗಿದೆ. 13ಅದನ್ನು ಪವಿತ್ರ
ವಾದ ಸ್ಥಳದಲ್ಲಿ ಮಾತ್ರ ತಿನ್ನಬೇಕು. ಅದು ಯೆಹೋವನಿ
ಗಾಗಿ ಅಗ್ನಿಯಲ್ಲಿ ಹೋಮವಾದ ಸಮರ್ಪಣೆಗಳಲ್ಲಿ
ಒಂದು ಭಾಗವಾಗಿದೆ. ಯೆಹೋವನಿಗಾಗಿ ಬೆಂಕಿಯ
ಮೂಲಕ ಸಮರ್ಪಿಸಿದವುಗಳಲ್ಲಿ ನಿನಗೂ ನಿನ್ನ ಗಂಡು
ಮಕ್ಕಳಿಗೂ ಇದು ಸೇರತಕ್ಕ ಪಾಲಾಗಿದೆ. ನಿಮಗೆ ಈ ಕಟ್ಟಳೆ
ಯನ್ನು ಕೊಡಲು ನನಗೆ ಆಜ್ಞಾಪಿಸಲಾಗಿದೆ.
14''ಮಾತ್ರವಲ್ಲದೆ ನೀನು, ನಿನ್ನ ಪುತ್ರರು ಮತ್ತು ನಿನ್ನ
ಹೆಣ್ಣುಮಕ್ಕಳು ಯೆಹೋವನಿಗೆ ನೈವೇದ್ಯವಾಗಿ ನಿವಾಳಿ
ಸಿದ ಎದೆಯ ಭಾಗವನ್ನು ಮತ್ತು ಅರ್ಪಿಸಲ್ಪಟ್ಟ ತೊಡೆ
ಯನ್ನು ತಿನ್ನಬೇಕು. ನೀವು ಅವುಗಳನ್ನು ಪವಿತ್ರಸ್ಥಳದಲ್ಲಿ
ತಿನ್ನಬೇಕಾಗಿಲ್ಲ. ಆದರೆ ನೀವು ಅವುಗಳನ್ನು ಶುದ್ಧವಾದ
ಸ್ಥಳದಲ್ಲಿ ತಿನ್ನಬೇಕು. ಯಾಕಂದರೆ ಅವುಗಳು ಸಮಾಧಾನ
ಯಜ್ಞಗಳಿಂದ ಬಂದವುಗಳಾಗಿವೆ. ಇಸ್ರೇಲರು ಆ ಕಾಣಿಕೆ
ಗಳನ್ನು ದೇವರಿಗಾಗಿ ಕೊಡುತ್ತಾರೆ. ಜನರು ಆ ಪಶು
ಗಳಲ್ಲಿ ಕೆಲವು ಭಾಗಗಳನ್ನು ತಿನ್ನುತ್ತಾರೆ. ಆದರೆ ಎದೆಯ
ಭಾಗವು ನಿಮ್ಮ ಪಾಲಾಗಿರುತ್ತದೆ. 15ಜನರು ಪ್ರಾಣಿಗಳ
ಕೊಬ್ಬನ್ನು ಅಗ್ನಿಯ ಮೂಲಕ ಹೋಮಮಾಡುವಾಗ
ಯಾಜಕರಿಗಾಗಿ ತೆಗೆದಿಟ್ಟ ತೊಡೆಯ ಭಾಗವನ್ನು ಮತ್ತು
ನೈವೇದ್ಯವಾಗಿ ನಿವಾಳಿಸಬೇಕಾದ ಎದೆಯ ಭಾಗವನ್ನು
ಯೆಹೋವನ ಸನ್ನಿಧಿಗೆ ತರಬೇಕು. ಅದು ನಿಮ್ಮ ಪಾಲಾ
ಗಿರುವುದು. ಅದು ನಿನಗೂ ನಿನ್ನ ಮಕ್ಕಳಿಗೂ ಸೇರಿದ್ದು.
ಯೆಹೋವನು ಆಜ್ಞಾಪಿಸಿದಂತೆ ಯಜ್ಞಗಳ ಆ ಭಾಗವು
ಎಂದೆಂದೂ ನಿಮ್ಮ ಪಾಲಾಗಿರುತ್ತವೆ'' ಎಂದು ಹೇಳಿದನು.
16ಮೋಶೆಯು ಪಾಪಪರಿಹಾರಕ್ಕಾಗಿ ಸಮರ್ಪಿತವಾದ
ಹೋತದ ಕುರಿತು ವಿಚಾರಿಸಿದಾಗ ಅದನ್ನು ಸುಟ್ಟುಬಿಟ್ಟ
ರೆಂದು ಕೇಳಿ ಆರೋನನ ಮತ್ತು ಅವನ ಪುತ್ರರಾದ ಎಲ್ಲಾ
ಜಾರ್ ಮತ್ತು ಈತಾಮಾರ್‌ರವರ ಮೇಲೆ ಬಹು ಕೋಪ
ಗೊಂಡನು. ಮೋಶೆಯು, 17''ನೀವು ಹೋತದ ಮಾಂಸ
ವನ್ನು ಪವಿತ್ರಸ್ಥಳದಲ್ಲಿ ತಿನ್ನಬೇಕಾಗಿತ್ತು. ಅದು ಬಹಳ
ಪವಿತ್ರವಾದದ್ದಲ್ಲವೇ? ನೀವು ಯಾಕೆ ಅದನ್ನು
ಯೆಹೋವನ ಸನ್ನಿಧಿಯಲ್ಲಿ ತಿನ್ನಲಿಲ್ಲ? ನೀವು ಜನರ
ಪಾಪಪರಿಹಾರಮಾಡುವಂತೆಯೂ ಜನರ ದೋಷವನ್ನು
ಪರಿಹಾರಮಾಡುವಂತೆಯೂ ಯೆಹೋವನು ಅದನ್ನು
ನಿಮಗೆ ಕೊಟ್ಟನು. 18ಆ ಹೋತದ ರಕ್ತವನ್ನು ಪವಿತ್ರಸ್ಥಳದ
ಒಳಗಡೆ ತರಲಿಲ್ಲ. ನಾನು ಆಜ್ಞಾಪಿಸಿದಂತೆ ನೀವು ಅದರ
ಮಾಂಸವನ್ನು ಪವಿತ್ರಸ್ಥಳದಲ್ಲಿ ತಿನ್ನಬೇಕಾಗಿತ್ತು''
ಅಂದನು.
19ಆದರೆ ಆರೋನನು ಮೋಶೆಗೆ, ''ನೋಡು, ಈ ದಿನ
ಅವರು ಯೆಹೋವನ ಸನ್ನಿಧಿಗೆ ಪಾಪಪರಿಹಾರಕ ಮತ್ತು

ಸರ್ವಾಂಗಹೋಮಗಳನ್ನು ತಂದಿದ್ದರೂ ನನಗೆ ಈ ಆಪತ್ತು ಸಂಭವಿಸಿತು. ಹೀಗಿರುವಾಗ ನಾನು ಪಾಪಪರಿಹಾರಕ ಸಮರ್ಪಣೆಯ ಪಶುವಿನ ಮಾಂಸವನ್ನು ಈ ದಿನದಲ್ಲಿ ತಿಂದಿದ್ದರೆ ಯೆಹೋವನಿಗೆ ಒಳ್ಳೆಯದಾಗಿ ತೋರುತ್ತಿತ್ತೋ? ಇಲ್ಲ!’’ ಎಂದು ಹೇಳಿದನು.

20ಮೋಶೆಯು ಆ ಮಾತನ್ನು ಕೇಳಿ ಒಪ್ಪಿಕೊಂಡನು.

### ಮಾಂಸವನ್ನು ತಿನ್ನುವುದರ ಬಗ್ಗೆ ನಿಯಮಗಳು

11 ಯೆಹೋವನು ಮೋಶೆ ಆರೋನರಿಗೆ ಹೀಗಂದನು: 2‘‘ಇಸ್ರೇಲರಿಗೆ ಹೇಳಬೇಕಾದದ್ದೇನೆಂದರೆ, ನೀವು ಈ ಪಶುಗಳನ್ನು ತಿನ್ನಬಹುದು: 3ಕಾಲ್ಗೊರಸು ಸೀಳಿರುವ ಮತ್ತು ಮೆಲಕು ಹಾಕುವ ಪಶುಗಳ ಮಾಂಸವನ್ನು ತಿನ್ನಬಹುದು.

4-6‘‘ಕೆಲವು ಪಶುಗಳು ಮೆಲಕು ಹಾಕುತ್ತವೆ, ಆದರೆ ಅವುಗಳ ಕಾಲ್ಗೊರಸು, ಸೀಳಿರುವುದಿಲ್ಲ; ಅವುಗಳ ಮಾಂಸವನ್ನು ತಿನ್ನಕೂಡದು. ಒಂಟೆಗಳು, ಬೆಟ್ಟದ ಮೊಲಗಳು ಮತ್ತು ಮೊಲಗಳು ಮೆಲಕುಹಾಕುತ್ತವೆ. ಆದರೆ ಅವುಗಳ ಗೊರಸು ಸೀಳಿರುವುದಿಲ್ಲ. ಆದ್ದರಿಂದ ಅವು ನಿಮಗೆ ಅಶುದ್ಧ. 7ಇನ್ನು ಕೆಲವು ಪಶುಗಳ ಕಾಲ್ಗೊರಸುಗಳು ಸೀಳಿರುತ್ತವೆ. ಆದರೆ ಅವು ಮೆಲಕು ಹಾಕುವುದಿಲ್ಲ; ಅವುಗಳ ಮಾಂಸವನ್ನು ತಿನ್ನಕೂಡದು. ಹಂದಿಗಳ ಗೊರಸುಗಳು ಸೀಳಿರುತ್ತವೆ ಆದರೆ ಮೆಲಕು ಹಾಕುವುದಿಲ್ಲ. ಆದ್ದರಿಂದ ಅವು ನಿಮಗೆ ಅಶುದ್ಧ. 8ಅವುಗಳ ಮಾಂಸವನ್ನು ತಿನ್ನಕೂಡದು. ಅವುಗಳ ಮೃತ ಶರೀರಗಳನ್ನು ಸಹ ಮುಟ್ಟಬಾರದು. ಅವು ನಿಮಗೆ ಅಶುದ್ಧ!

### ಸಮುದ್ರಾಹಾರದ ಬಗ್ಗೆ ನಿಯಮಗಳು

9‘‘ನೀರಿನಲ್ಲಿಯಾಗಲೀ ನದಿಯಲ್ಲಾಗಲೀ ಜೀವಿಸುವ ಜಲಪ್ರಾಣಿಗೆ ರೆಕ್ಕೆಯಿದ್ದು ಮೈಯೆಲ್ಲಾ ಪರೆಪರೆಯಿದ್ದರೆ ನೀವು ಅದನ್ನು ತಿನ್ನಬಹುದು. 10-11ಆದರೆ ನೀರಿನಲ್ಲಿಯಾಗಲೀ ನದಿಯಲ್ಲಾಗಲೀ ಜೀವಿಸುತ್ತಿರುವ ಜಲಪ್ರಾಣಿಗೆ ರೆಕ್ಕೆಗಳು ಮತ್ತು ಪರೆಗಳು ಇಲ್ಲದಿದ್ದರೆ, ನೀವು ಆ ಪ್ರಾಣಿಯನ್ನು ತಿನ್ನಕೂಡದು. ತಿನ್ನುವುದಕ್ಕೆ ಅಯೋಗ್ಯವಾದದ್ದೆಂದು ಯೆಹೋವನು ಹೇಳುವ ಪ್ರಾಣಿಗಳಲ್ಲಿ ಅದು ಒಂದಾಗಿದೆ. ಆ ಪ್ರಾಣಿಯ ಮಾಂಸವನ್ನು ತಿನ್ನಕೂಡದು. ಅದರ ಮೃತಶರೀರವನ್ನೂ ಮುಟ್ಟಕೂಡದು. 12ನೀರಿನಲ್ಲಿರುವ ಜಲಪ್ರಾಣಿಗೆ ರೆಕ್ಕೆಗಳು ಮತ್ತು ಪರೆಗಳು ಇಲ್ಲದಿದ್ದರೆ ಅದು ತಿನ್ನುವುದಕ್ಕೆ ಅಯೋಗ್ಯವಾಗಿದೆ.

### ತಿನ್ನಬಾರದ ಪಕ್ಷಿಗಳು

13‘‘ನಿಷಿದ್ಧವಾದ ಈ ಪಕ್ಷಿಗಳ ಮಾಂಸವನ್ನು ನೀವು ತಿನ್ನಬಾರದು: ಗರುಡ , ಬೆಟ್ಟದ ಹದ್ದು, ಕ್ರೌಂಚ,* 14ಹದ್ದು ಎಲ್ಲಾ ವಿಧವಾದ ಗಿಡುಗ, 15ಎಲ್ಲಾ ವಿಧವಾದ ಕಾಗೆಗಳು, 16ಉಷ್ಟಪಕ್ಷಿ, ಉಲೂಕ, ಕಡಲ್ಹಕ್ಕಿ ಎಲ್ಲಾ ವಿಧವಾದ ಡೇಗೆ, 17ಗೂಬೆ, ಹೆಗ್ಗೂಬೆ, ಸಮುದ್ರಪಕ್ಷಿ, 18ನೀರುಕೋಳಿ, ರಣಹದ್ದು, ನೀರುಕಾಗೆ, 19ಕೊಕ್ಕರೆ, ಸಕಲ ವಿಧವಾದ ಬಕ, ಹೆಡೆಹಕ್ಕಿ ಮತ್ತು ಬಾವಲಿ.

### ಕ್ರಿಮಿಕೀಟಗಳನ್ನು ತಿನ್ನುವುದರ ಬಗ್ಗೆ ನಿಯಮಗಳು

20‘‘ಕ್ರಿಮಿಕೀಟಗಳು ರೆಕ್ಕೆಗಳುಳ್ಳದ್ದಾಗಿ ನಾಲ್ಕು ಕಾಲುಗಳಲ್ಲಿ ಹರಿದಾಡುವುದಾಗಿದ್ದರೆ ಅವು ನಿಮಗೆ ನಿಷಿದ್ಧವಾಗಿವೆ. ಆ ಕ್ರಿಮಿಕೀಟಗಳನ್ನು ತಿನ್ನಕೂಡದು. 21ಆದರೆ ಕೀಟಗಳು ನೆಲದ ಮೇಲೆ ಕುಪ್ಪಳಿಸುವುದಕ್ಕೋಸ್ಕರ ಕೀಲುಗಳುಳ್ಳ ಕಾಲುಗಳನ್ನು ಹೊಂದಿದ್ದರೆ ಅವುಗಳನ್ನು ನೀವು ತಿನ್ನಬಹುದು. 22ಮಿಡತೆಗಳನ್ನು ರೆಕ್ಕೆಗಳುಳ್ಳ ಎಲ್ಲಾ ವಿಧದ ಮಿಡತೆಗಳನ್ನು ಎಲ್ಲಾ ವಿಧವಾದ ಚಿಟ್ಟೆ ಮಿಡತೆಗಳನ್ನು, ಎಲ್ಲಾ ವಿಧವಾದ ಸಣ್ಣ ಮಿಡತೆಗಳನ್ನು ಸಹ ತಿನ್ನಬಹುದು.

23‘‘ಆದರೆ ರೆಕ್ಕೆಗಳಿದ್ದು ನಾಲ್ಕು ಕಾಲುಗಳಿರುವ ಬೇರೆ ಎಲ್ಲಾ ಕ್ರಿಮಿಕೀಟಗಳನ್ನು ನೀವು ತಿನ್ನಬಾರದು. 24ಆ ಕ್ರಿಮಿಕೀಟಗಳು ನಿಮ್ಮನ್ನು ಅಶುದ್ಧ ಮಾಡುತ್ತವೆ. ಅವುಗಳ ಹೆಣಗಳನ್ನು ಮುಟ್ಟಿದವನು ಸಾಯಂಕಾಲದವರೆಗೆ ಅಶುದ್ಧನಾಗುವನು. 25ಯಾವಾನಾದರೂ ಆ ಸತ್ತ ಕೀಟಗಳಲ್ಲಿ ಒಂದನ್ನು ಎತ್ತಿದರೆ, ಅವನು ತನ್ನ ಬಟ್ಟೆಗಳನ್ನು ತೊಳೆದುಕೊಳ್ಳಬೇಕು. ಅವನು ಸಾಯಂಕಾಲದ ತನಕ ಅಶುದ್ಧನಾಗಿರುವನು.

### ಪ್ರಾಣಿಗಳ ಬಗ್ಗೆ ಇನ್ನೂ ಹೆಚ್ಚಿನ ನಿಯಮಗಳು

26-27‘‘ಕೆಲವು ಪ್ರಾಣಿಗಳಿಗೆ ಸೀಳಿದ ಕಾಲ್ಗೊರಸುಗಳು ಇವೆ. ಆದರೆ ಕಾಲ್ಗೊರಸುಗಳು ಸರಿಯಾಗಿ ಎರಡು ಭಾಗಗಳಾಗಿರುವುದಿಲ್ಲ. ಕೆಲವು ಪ್ರಾಣಿಗಳು ಮೆಲಕು ಹಾಕುವುದಿಲ್ಲ. ಕೆಲವು ಪ್ರಾಣಿಗಳಿಗೆ (ಕಾಲ್ಗೊರಸುಗಳು ಇರುವುದಿಲ್ಲ.) ಅವು ಅಂಗಾಲುಗಳಿಂದ ನಡೆಯುತ್ತವೆ. ಆ ಎಲ್ಲಾ ಪ್ರಾಣಿಗಳು ನಿಮಗೆ ಅಶುದ್ಧ. ಅವುಗಳ ಸತ್ತದೇಹಗಳನ್ನು ಮುಟ್ಟಿದವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. 28ಯಾವನಾದರೂ ಅವುಗಳ ಹೆಣಗಳನ್ನು ಎತ್ತಿದರೆ ಅವನು ತನ್ನ ಬಟ್ಟೆಗಳನ್ನು ತೊಳೆದುಕೊಳ್ಳಬೇಕು. ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. ಆ ಪ್ರಾಣಿಗಳು ನಿಮಗೆ ಅಶುದ್ಧವಾಗಿವೆ.

### ಹರಿದಾಡುವ ಪ್ರಾಣಿಗಳ ಬಗ್ಗೆ ನಿಯಮಗಳು

29‘‘ಹರಿದಾಡುವ ಈ ಪ್ರಾಣಿಗಳು ನಿಮಗೆ ಅಶುದ್ಧ: ಮುಂಗುಸಿ, ಇಲಿ, ಎಲ್ಲಾ ವಿಧವಾದ ದೊಡ್ಡ ಹಲ್ಲಿ, 30ಹಾವರಾಣಿ, ಮೊಸಳೆ, ಹಲ್ಲಿ, ಬಸವನ ಹುಳ, ಚಿಟ್ಟೆಲಿ. 31ಹರಿದಾಡುವ ಆ ಪ್ರಾಣಿಗಳು ನಿಮಗೆ ಅಶುದ್ಧವಾಗಿವೆ. ಅವುಗಳ

---

**ಕ್ರೌಂಚ** ಅಕ್ಷರಶಃ ಬುಜರ್ಡ್ ಡೇಗೆ ಜಾತಿಯ ಒಂದು ಪಕ್ಷಿ.

ಹೆಣಗಳನ್ನು ಮುಟ್ಟಿದವನು ಸಾಯಂಕಾಲದವರೆಗೆ
ಅಶುದ್ಧನಾಗುವನು.

## ಅಶುದ್ಧ ಪ್ರಾಣಿಗಳ ಬಗ್ಗೆ ನಿಯಮಗಳು

32‘‘ಅಶುದ್ಧವಾದ ಆ ಪ್ರಾಣಿಗಳಲ್ಲಿ ಯಾವುದಾದರೂ
ಸತ್ತು, ಯಾವದೇ ವಸ್ತುವಿನ ಮೇಲೆ ಬಿದ್ದರೆ, ಆಗ ಆ
ವಸ್ತುವು ಅಶುದ್ಧವಾಗುವುದು. ಅದು ಮರದ ವಸ್ತು
ವಾಗಲೀ ಬಟ್ಟೆಯಾಗಲೀ, ಚರ್ಮವಾಗಲೀ, ಶೋಕಬಟ್ಟೆ
ಯಾಗಲೀ* ಅದು ಎಂಥದ್ದಾಗಿದ್ದರೂ ಕೆಲಸಕ್ಕೆ ಉಪ
ಯುಕ್ತವಾಗಿದ್ದರೂ ಅದನ್ನು ನೀರಿನಲ್ಲಿ ಹಾಕಬೇಕು.
ಅದು ಸಾಯಂಕಾಲದವರೆಗೆ ಅಶುದ್ಧವಾಗಿರುವುದು.
ನಂತರ ಅದು ಶುದ್ಧವಾಗುವುದು. 33ಅಶುದ್ಧವಾದ ಆ
ಪ್ರಾಣಿಗಳಲ್ಲಿ ಯಾವುದಾದರೊಂದು ಸತ್ತು ಮಣ್ಣಿನ
ಬೋಗುಣಿಗೆ ಬಿದ್ದರೆ, ಆಗ ಆ ಬೋಗುಣಿಯಲ್ಲಿ ಇರುವು
ದೆಲ್ಲಾ ಅಶುದ್ಧವಾಗುವುದು. ಆ ಬೋಗುಣಿಯನ್ನು ನೀವು
ಒಡೆದುಹಾಕಬೇಕು. 34(ಅಶುದ್ಧವಾದ ಮಣ್ಣಿನ ಬೋಗು
ಣಿಯಿಂದ) ನೀರು ಯಾವುದೇ ಆಹಾರಕ್ಕೆ ಬಂದರೆ, ಆಗ
ಆ ಆಹಾರವು ಅಶುದ್ಧವಾಗುವುದು. ಅಶುದ್ಧವಾದ
ಬೋಗುಣಿಯಲ್ಲಿ ಯಾವುದೇ ಪಾನದ್ರವ್ಯವಿದ್ದರೂ ಅದು
ಅಶುದ್ಧವಾಗುವುದು. 35ಸತ್ತಪ್ರಾಣಿಯ ಯಾವುದೇ ಭಾಗ
ಯಾವದೇ ವಸ್ತುವಿನ ಮೇಲೆ ಬಿದ್ದರೂ ಆ ವಸ್ತು ಅಶುದ್ಧ
ವಾಗಿದೆ. ಅದು (ಮಣ್ಣಿನ) ಒಲೆಯಾಗಿದ್ದರೂ ಮಡಿಕೆ
ಯಾಗಿದ್ದರೂ ಅದನ್ನು ಒಡೆದುಹಾಕಬೇಕು. ಆ ವಸ್ತುಗಳು
ಇನ್ನೆಂದಿಗೂ ಶುದ್ಧವಾಗಿರುವುದಿಲ್ಲ. ಅದು ನಿಮಗೆ
ಯಾವಾಗಲೂ ಅಶುದ್ಧವಾಗಿರುವವು.

36‘‘ಒರತೆಯಾಗಲೀ ನೀರನ್ನು ಪಡೆಯುವ ಬಾವಿ
ಯಾಗಲೀ ಶುದ್ಧವಾಗಿರುವುದು. ಆದರೆ ಯಾವನಾದರೂ
ಅಶುದ್ಧ ಪ್ರಾಣಿಗಳ ಹೆಣವನ್ನು ಮುಟ್ಟಿದರೆ, ಅವನು
ಅಶುದ್ಧನಾಗುವನು. 37ಸತ್ತ ಅಶುದ್ಧ ಪ್ರಾಣಿಗಳ
ಯಾವದೇ ಭಾಗವು ನೆಡುವುದಕ್ಕೆ ಇಟ್ಟಿರುವ ಬೀಜದ
ಮೇಲೆ ಬಿದ್ದರೂ ಆ ಬೀಜ ಶುದ್ಧವಾಗಿಯೇ ಇರುತ್ತದೆ.
38ಆದರೆ ನೀರು ಹಾಕಿ ನೆನಸಿದ ಬೀಜಗಳ ಮೇಲೆ ಸತ್ತ
ಅಶುದ್ಧ ಪ್ರಾಣಿಗಳ ಯಾವುದೇ ಭಾಗ ಬಿದ್ದರೆ, ಆ ಬೀಜ
ಗಳು ನಿಮಗೆ ಅಶುದ್ಧವಾಗಿವೆ.

39‘‘ಅಲ್ಲದೆ ನೀವು ಮಾಂಸಾಹಾರಕ್ಕಾಗಿ ಉಪಯೋಗಿ
ಸುವ ಯಾವದೇ ಪ್ರಾಣಿ ಸತ್ತರೆ, ಅದನ್ನು ಮುಟ್ಟುವ ವ್ಯಕ್ತಿ
ಸಾಯಂಕಾಲದವರೆಗೆ ಅಶುದ್ಧನಾಗಿರುವನು. 40ಈ
ಪ್ರಾಣಿಯ ಮಾಂಸವನ್ನು ತಿನ್ನುವ ವ್ಯಕ್ತಿ ತನ್ನ ಬಟ್ಟೆಗಳನ್ನು
ತೊಳೆದುಕೊಳ್ಳಬೇಕು. ಈ ವ್ಯಕ್ತಿ ಸಾಯಂಕಾಲದವರೆಗೆ
ಅಶುದ್ಧನಾಗಿರುವನು. ಸತ್ತಪ್ರಾಣಿಯನ್ನು ಎತ್ತುವವನು
ತನ್ನ ಬಟ್ಟೆಗಳನ್ನು ತೊಳೆದುಕೊಳ್ಳಬೇಕು. ಈ ವ್ಯಕ್ತಿ
ಸಾಯಂಕಾಲದವರೆಗೆ ಅಶುದ್ಧನಾಗಿರುವನು.

41‘‘ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳನ್ನೆಲ್ಲ
ಯೆಹೋವನು ನಿಮಗೆ ನಿಷಿದ್ಧಗೊಳಿಸಿದ್ದಾನೆ. ನೀವು
ಅವುಗಳ ಮಾಂಸವನ್ನು ತಿನ್ನಬಾರದು. 42ಹೊಟ್ಟೆಯ
ಮೇಲೆ ತೆವಳಿಕೊಂಡು ಹೋಗುವ ಜಂತುವನ್ನು ಅಥವಾ
ತನ್ನ ನಾಲ್ಕುಕಾಲುಗಳಲ್ಲಿ ನಡೆಯುವ ಜಂತುವನ್ನು,
ಅಥವಾ ಅನೇಕ ಕಾಲುಗಳುಳ್ಳ ಜಂತುಗಳನ್ನು ನೀವು ತಿನ್ನ
ಬಾರದು. 43ಆ ಜಂತುಗಳು ನಿಮ್ಮನ್ನು ಹೊಲೆ ಮಾಡ
ದಿರಲಿ. ನೀವು ಅಶುದ್ಧರಾಗಬಾರದು. 44ಯಾಕಂದರೆ,
ನಾನೇ ನಿಮ್ಮ ದೇವರಾದ ಯೆಹೋವನು. ನಾನು ಪರಿ
ಶುದ್ಧನಾಗಿದ್ದೇನೆ. ಆದ್ದರಿಂದ ನೀವೂ ಪರಿಶುದ್ಧ
ರಾಗಿರಬೇಕು. ಹರಿದಾಡುವ ಆ ಜಂತುಗಳಿಂದ ನಿಮ್ಮನ್ನು
ಅಶುದ್ಧರನ್ನಾಗಿ ಮಾಡಿಕೊಳ್ಳಬೇಡಿರಿ. 45ನಿಮ್ಮನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದ ಯೆಹೋವನೇ
ನಾನು. ನೀವು ನನ್ನ ವಿಶೇಷ ಜನರಾಗಿರಬೇಕೆಂದು ಮತ್ತು
ನಾನು ನಿಮ್ಮ ದೇವರಾಗಿರಬೇಕೆಂದು ನಿಮ್ಮನ್ನು ಕರೆದು
ಕೊಂಡು ಬಂದೆನು. ನಾನು ಪರಿಶುದ್ಧನಾಗಿರುವಂತೆಯೇ
ನೀವೂ ಪರಿಶುದ್ಧರಾಗಿರಬೇಕು.’’

46ಎಲ್ಲಾ ಸಾಕುಪ್ರಾಣಿಗಳು, ಪಕ್ಷಿಗಳು ಮತ್ತು
ಭೂಮಿಯ ಮೇಲಿರುವ ಇತರ ಪ್ರಾಣಿಗಳ ಬಗ್ಗೆ ಇರುವ
ನಿಯಮಗಳು ಇವುಗಳೇ. ಸಮುದ್ರದಲ್ಲಿರುವ ಮತ್ತು
ನೆಲದ ಮೇಲೆ ಹರಿದಾಡುವ ಎಲ್ಲಾ ಪ್ರಾಣಿಗಳ ಬಗ್ಗೆ
ಇರುವ ನಿಯಮಗಳು ಇವುಗಳೇ. 47ಅಶುದ್ಧವಾದ ಮತ್ತು
ಶುದ್ಧವಾದ ಪ್ರಾಣಿಗಳ ಕುರಿತು ತಿಳಿದುಕೊಳ್ಳಲು ನಿಮಗೆ
ಈ ನಿಯಮಗಳು ಸಹಾಯಕವಾಗಿವೆ. ಜನರು ಯಾವ
ಪ್ರಾಣಿಗಳ ಮಾಂಸವನ್ನು ತಿನ್ನಬಹುದು ಮತ್ತು ಯಾವು
ದನ್ನು ತಿನ್ನಬಾರದೆಂದು ಈ ನಿಯಮಗಳು ತಿಳಿಸುತ್ತವೆ.

## ಬಾಣಂತಿಯರ ಶುದ್ಧೀಕರಣ

12 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
2‘‘ಇಸ್ರೇಲರಿಗೆ ಹೀಗೆ ಹೇಳು : ಒಬ್ಬ ಸ್ತ್ರೀಯು
ಬಸುರಾಗಿ ಗಂಡುಮಗುವನ್ನು ಹೆತ್ತರೆ, ಅವಳು ಏಳು ದಿನ
ಗಳವರೆಗೆ ಅಶುದ್ಧಳಾಗಿರುವಳು. ಅವಳ ತಿಂಗಳ ಮುಟ್ಟಿ
ನಿಂದ ಅಶುದ್ಧಳಾಗುವಂತೆಯೇ ಅಶುದ್ಧಳಾಗಿರುವಳು.
3ಎಂಟನೆಯ ದಿನದಲ್ಲಿ ಗಂಡುಮಗುವಿಗೆ ಸುನ್ನತಿ ಮಾಡಿಸ
ಬೇಕು. 4ಆಮೇಲೆ ಅವಳು ತನ್ನ ರಕ್ತಸ್ರಾವದಿಂದ ಶುದ್ಧ
ಳಾಗಲು ಮೂವತ್ತುಮೂರು ದಿನಗಳು ಹಿಡಿಯುವುದು.
ಆಕೆ ಪರಿಶುದ್ಧವಾದ ಯಾವುದನ್ನೂ ಮುಟ್ಟಬಾರದು.
ಆಕೆಯ ಶುದ್ಧೀಕರಣ ಪೂರ್ತಿಯಾಗುವವರೆಗೆ ಆಕೆ ಆ
ಪವಿತ್ರ ಸ್ಥಳವನ್ನು ಪ್ರವೇಶಿಸಬಾರದು. 5ಆದರೆ ಸ್ತ್ರೀಯು
ಹೆಣ್ಣುಮಗುವಿಗೆ ಜನ್ಮವಿತ್ತರೆ, ಅವಳು ಆಕೆಯ ತಿಂಗಳ

---

**ಶೋಕಬಟ್ಟೆ** ಅಕ್ಷರಶಃ ಗೋಣಿತಟ್ಟು

ಮುಟ್ಟಿನಿಂದ ಅಶುದ್ಧಳಾಗುವಂತೆ ಎರಡು ವಾರಗಳವರೆಗೆ
ಅಶುದ್ಧಳಾಗಿರುವಳು. ಆಕೆಯು ರಕ್ತಸ್ರಾವದಿಂದ ಶುದ್ಧ
ಳಾಗಲು ಅರವತ್ತಾರು ದಿನಗಳು ಹಿಡಿಯುವವು.
6‘‘ಶುದ್ಧೀಕರಣ ಸಮಯ ಪೂರ್ತಿಯಾದ ನಂತರ
ಹೆಣ್ಣುಮಗುವಿನ ಅಥವಾ ಗಂಡುಮಗುವಿನ ತಾಯಿಯು
ವಿಶೇಷ ಯಜ್ಞಗಳನ್ನು ದೇವದರ್ಶನಗುಡಾರದ ಬಾಗಿಲ
ಬಳಿಗೆ ತಂದು ಅವುಗಳನ್ನು ಯಾಜಕನಿಗೆ ಕೊಡಬೇಕು.
ಆಕೆಯು ಸರ್ವಾಂಗಹೋಮಕ್ಕಾಗಿ ಒಂದು ವರ್ಷದ ಕುರಿ
ಮರಿಯನ್ನೂ ಪಾಪಪರಿಹಾರಕಯಜ್ಞಕ್ಕಾಗಿ ಒಂದು
ಬೆಳವಕ್ಕಿಯನ್ನಾಗಲೀ ಅಥವಾ ಪಾರಿವಾಳದ ಮರಿಯ
ನ್ನಾಗಲೀ ತರಬೇಕು. 7-8ಆಕೆಯು ಕುರಿಮರಿಯನ್ನು
ತರಲು ಶಕ್ತಳಾಗಿಲ್ಲದಿದ್ದರೆ, ಎರಡು ಬೆಳವಕ್ಕಿಗಳನ್ನಾಗಲೀ
ಅಥವಾ ಎರಡು ಪಾರಿವಾಳದ ಮರಿಗಳನ್ನಾಗಲೀ ತರ
ಬಹುದು. ಅವುಗಳಲ್ಲಿ ಒಂದನ್ನು ಸರ್ವಾಂಗ ಹೋಮ
ಕ್ಕಾಗಿಯೂ ಇನ್ನೊಂದನ್ನು ಪಾಪಪರಿಹಾರಕ ಯಜ್ಞಕ್ಕಾ
ಗಿಯೂ ತರಬೇಕು. ಯಾಜಕನು ಅವುಗಳನ್ನು
ಯೆಹೋವನ ಸನ್ನಿಧಿಯಲ್ಲಿ ಅರ್ಪಿಸಬೇಕು. ಹೀಗೆ ಯಾಜ
ಕನು ಆಕೆಯನ್ನು ಶುದ್ಧಿಗೊಳಿಸುವನು, ಆಗ ಆಕೆಯು ರಕ್ತ
ಸ್ರಾವದ ಅಶುದ್ಧತೆಯಿಂದ ಶುದ್ಧಳಾಗುವಳು. ಗಂಡು
ಮಗುವಿಗೆ ಅಥವಾ ಹೆಣ್ಣುಮಗುವಿಗೆ ಜನ್ಮವಿತ್ತ ಸ್ತ್ರೀಯು
ಅನುಸರಿಸಬೇಕಾದ ನಿಯಮಗಳು ಇವುಗಳೇ.’’

### ಚರ್ಮರೋಗಗಳ ಕುರಿತು ನಿಯಮಗಳು

13 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇ
ನೆಂದರೆ: 2‘‘ಒಬ್ಬ ಮನುಷ್ಯನ ಮೇಲೆ ಊತ
ವಾಗಲೀ ಗುಳ್ಳೆಯಾಗಲೀ ಹೊಳೆಯುವ ಮಚ್ಚೆಯಾಗಲೀ
ಉಂಟಾಗಿ ಮಚ್ಚೆಯು ಕುಷ್ಠರೋಗದಂತೆ* ಕಂಡು
ಬಂದರೆ, ಅವನನ್ನು ಯಾಜಕನಾದ ಆರೋನನ ಬಳಿಗೆ
ಅಥವಾ ಯಾಜಕರಾದ ಅವರ ಪುತ್ರರಲ್ಲಿ ಒಬ್ಬನ ಬಳಿಗೆ
ಕರೆದುಕೊಂಡು ಬರಬೇಕು. 3ಯಾಜಕನು ಅವನ ಚರ್ಮ
ದಲ್ಲಿರುವ ಮಚ್ಚೆಯನ್ನು ನೋಡಬೇಕು. ಮಚ್ಚೆಯಲ್ಲಿ
ರುವ ರೋಮವು ಬೆಳ್ಳಗಾಗಿದ್ದರೆ ಮತ್ತು ಮಚ್ಚೆಯು ಅವನ
ಚರ್ಮಕ್ಕಿಂತ ತಗ್ಗಾಗಿದ್ದರೆ ಅದು ಕುಷ್ಠರೋಗವಾಗಿದೆ.
ಯಾಜಕನು ಅವನನ್ನು ಪರೀಕ್ಷಿಸಿದ ನಂತರ ಆ ವ್ಯಕ್ತಿ
ಯನ್ನು ಅಶುದ್ಧನೆಂದು (ಆಚರಣೆಗನುಸಾರವಾಗಿ)
ಪ್ರಕಟಿಸಬೇಕು.
4‘‘ಕೆಲವುಬಾರಿ ಒಬ್ಬ ವ್ಯಕ್ತಿಯ ಚರ್ಮದ ಮೇಲೆ ಬಿಳಿ
ಮಚ್ಚೆ ಇರುತ್ತದೆ. ಆದರೆ ಮಚ್ಚೆಯು ಚರ್ಮಕ್ಕಿಂತ ತಗ್ಗಾ
ಗಿರದಿದ್ದರೆ ಮತ್ತು ಅದರ ರೋಮ ಬೆಳ್ಳಗಾಗಿಲ್ಲದಿದ್ದರೆ
ಯಾಜಕನು ಅವನನ್ನು ಬೇರೆ ಜನರಿಂದ ಏಳು ದಿನಗಳ
ವರೆಗೆ ಪ್ರತ್ಯೇಕಿಸಬೇಕು. 5ಏಳನೆಯ ದಿನದಲ್ಲಿ ಯಾಜ
ಕನು ಅವನನ್ನು ಪರೀಕ್ಷಿಸಬೇಕು. ಮಚ್ಚೆಯು ಬದಲಾಗದೆ
ಚರ್ಮದ ಮೇಲೆ ಹರಡಲಿಲ್ಲವೆಂದು ಯಾಜಕನು
ಕಂಡರೆ, ಯಾಜಕನು ಅವನನ್ನು ಇನ್ನೂ ಏಳು ದಿನಗಳ
ವರೆಗೆ ಇತರ ಜನರಿಂದ ಪ್ರತ್ಯೇಕಿಸಬೇಕು. 6ಏಳು ದಿನಗಳ
ನಂತರ ಯಾಜಕನು ಮತ್ತೆ ಅವನನ್ನು ನೋಡಬೇಕು.
ಮಚ್ಚೆಯು ಮೊಬ್ಬಾಗಿ ಚರ್ಮದಲ್ಲಿ ಹರಡದೆ ಇದ್ದರೆ, ಆಗ
ಯಾಜಕನು ಅವನನ್ನು ಶುದ್ಧನೆಂದು ಪ್ರಕಟಿಸಬೇಕು.
ಯಾಕಂದರೆ ಮಚ್ಚೆಯು ಕೇವಲ ಗುಳ್ಳೆಯಾಗಿದೆ. ಆ ವ್ಯಕ್ತಿ
ತನ್ನ ಬಟ್ಟೆಗಳನ್ನು ಒಗೆದುಕೊಂಡು ತಿರುಗಿ ಶುದ್ಧ
ನಾಗುವನು.
7‘‘ಆದರೆ ಆ ವ್ಯಕ್ತಿಯ ಗುಳ್ಳೆಯು ಚರ್ಮದ ಮೇಲೆ
ಹೆಚ್ಚಾಗಿ ಹರಡಿದರೆ, ಆ ವ್ಯಕ್ತಿಯು ಯಾಜಕನ ಬಳಿಗೆ ಮತ್ತೆ
ಬರಬೇಕು. 8ಯಾಜಕನು ಪರೀಕ್ಷಿಸಿದಾಗ ಗುಳ್ಳೆಯು
ಚರ್ಮದ ಮೇಲೆ ಹರಡಿದ್ದರೆ, ಯಾಜಕನು ಅವನನ್ನು
ಅಶುದ್ಧನೆಂದು ಪ್ರಕಟಿಸಬೇಕು. ಅದು ಕುಷ್ಠರೋಗ
ವಾಗಿದೆ.
9‘‘ಒಬ್ಬನಿಗೆ ಕುಷ್ಠವಿದರೆ, ಅವನನ್ನು ಯಾಜಕನ ಬಳಿಗೆ
ಕರೆದುಕೊಂಡು ಬರಬೇಕು. 10ಯಾಜಕನು ಆ ವ್ಯಕ್ತಿ
ಯನ್ನು ನೋಡಬೇಕು. ಚರ್ಮದ ಮೇಲೆ ಬೆಳ್ಳಗಾದ
ಊತವಿದ್ದರೆ, ರೋಮವು ಬೆಳ್ಳಗಾಗಿದ್ದರೆ ಮತ್ತು
ಚರ್ಮದ ಊತದಿಂದ ಹಸಿಯಾಗಿ ಕಂಡರೆ, 11ಆಗ ಅದು
ಬಹಳ ಕಾಲದಿಂದ ಅವನ ಚರ್ಮದಲ್ಲಿರುವ ಕುಷ್ಠರೋಗ
ವಾಗಿದೆ. ಯಾಜಕನು ಅವನನ್ನು ಅಶುದ್ಧನೆಂದು ಪ್ರಕಟಿಸ
ಬೇಕು. ಯಾಜಕನು ಅವನನ್ನು ಪರೀಕ್ಷಿಸುವುದಕ್ಕಾಗಿ ಸ್ವಲ್ಪ
ಸಮಯದವರೆಗೆ ಜನರಿಂದ ಪ್ರತ್ಯೇಕಿಸುವುದಿಲ್ಲ.
ಯಾಕಂದರೆ ಆ ವ್ಯಕ್ತಿಯು ಈಗಾಗಲೇ ಅಶುದ್ಧ
ನಾಗಿದ್ದಾನೆ.
12‘‘ಕೆಲವು ಬಾರಿ ಚರ್ಮರೋಗವು ಒಬ್ಬನ ಮೈಯೆಲ್ಲಾ
ಹರಡಿಕೊಳ್ಳುವುದು. ಚರ್ಮರೋಗವು ಅವನನ್ನು ತಲೆ
ಯಿಂದ ಅಂಗಾಲಿನವರೆಗೂ ಮುಚ್ಚಿಕೊಳ್ಳುವುದು.
ಯಾಜಕನು ಆ ವ್ಯಕ್ತಿಯ ಇಡೀ ದೇಹವನ್ನು ನೋಡ
ಬೇಕು. 13ಚರ್ಮರೋಗವು ಇಡೀ ದೇಹವನ್ನು ವ್ಯಾಪಿಸಿ
ಆ ವ್ಯಕ್ತಿಯ ಚರ್ಮವು ಬಿಳಿ ಬಣ್ಣಕ್ಕೆ ತಿರುಗಿರುವುದನ್ನು
ಯಾಜಕನು ಕಂಡರೆ, ಆ ವ್ಯಕ್ತಿಯು ಶುದ್ಧನೆಂದು ಯಾಜ
ಕನು ಪ್ರಕಟಿಸಬೇಕು. 14ಆದರೆ ಆ ವ್ಯಕ್ತಿಯ ಚರ್ಮವು
ಹಸಿಯಾಗಿದ್ದರೆ, ಆ ವ್ಯಕ್ತಿಯು ಶುದ್ಧನಲ್ಲ. 15ಯಾಜಕನು
ಹಸಿಯಾದ ಚರ್ಮವನ್ನು ನೋಡಿದಾಗ, ಆ ವ್ಯಕ್ತಿಯನ್ನು
ಅಶುದ್ಧನೆಂದು ಪ್ರಕಟಿಸಬೇಕು. ಹಸಿಯಾದ ಚರ್ಮವು
ಶುದ್ಧವಲ್ಲ. ಅದು ಕುಷ್ಠರೋಗವಾಗಿದೆ.
16‘‘ಹಸಿಯಾದ ಚರ್ಮವು ಬದಲಾಗಿ ಬಿಳಿಯಾದರೆ,
ಆಗ ವ್ಯಕ್ತಿ ಯಾಜಕನ ಬಳಿಗೆ ಬರಬೇಕು. 17ಯಾಜಕನು

**ಕುಷ್ಠರೋಗ** ಹೀಬ್ರೂ ಭಾಷೆಯಲ್ಲಿ ಈ ಪದವು ಬೂಷ್ಟು ಮತ್ತು ಚರ್ಮ ರೋಗಗಳನ್ನು ಒಳಗೊಂಡಿದೆ. ಕೇವಲ ಕುಷ್ಠರೋಗವನ್ನು ಮಾತ್ರವಲ್ಲ.

ಅವನನ್ನು ಪರೀಕ್ಷಿಸಬೇಕು. ಮಚ್ಚೆಯು ಬೆಳ್ಳಗಾಗಿದ್ದರೆ, ಯಾಜಕನು ಆ ವ್ಯಕ್ತಿಯನ್ನು ಶುದ್ಧನೆಂದು ಪ್ರಕಟಿಸಬೇಕು. ಆ ವ್ಯಕ್ತಿಯು ಶುದ್ಧನಾಗಿದ್ದಾನೆ.

18''ಒಬ್ಬನ ಚರ್ಮದ ಮೇಲೆ ಹುಣ್ಣು ಎದ್ದಿದ್ದು ವಾಸಿ
ಯಾಗಿದ್ದಿರಬಹುದು. 19ಆದರೆ ಹುಣ್ಣಿದ್ದ ಜಾಗದಲ್ಲಿ ಬೆಳ್ಳ
ಗಾದ ಊತವಿದ್ದರೆ ಅಥವಾ ಕೆಂಪುಬಿಳುಪು ಮಿಶ್ರವಾದ
ಹೊಳೆಯುವ ಮಚ್ಚೆಯಿದ್ದರೆ, ಚರ್ಮದ ಈ ಭಾಗವನ್ನು
ಯಾಜಕನಿಗೆ ತೋರಿಸಬೇಕು. 20ಯಾಜಕನು ಅದನ್ನು
ಪರೀಕ್ಷಿಸಬೇಕು. ಅದು ಚರ್ಮಕ್ಕಿಂತ ತಗ್ಗಾಗಿದ್ದರೆ ಮತ್ತು
ಅದರ ಮೇಲಿರುವ ರೋಮವು ಬೆಳ್ಳಗಾಗಿದ್ದರೆ, ಯಾಜ
ಕನು ಅವನನ್ನು ಅಶುದ್ಧನೆಂದು ಪ್ರಕಟಿಸಬೇಕು. ಆ
ಕಲೆಯು ಕುಷ್ಠದ ಸೋಂಕಾಗಿದೆ. ಹುಣ್ಣಿನಿಂದ ಕುಷ್ಠ
ಬಂದಿದೆ. 21ಆದರೆ ಯಾಜಕನು ಮಚ್ಚೆಯನ್ನು ನೋಡಿ
ದಾಗ ಅದರಲ್ಲಿ ಬಿಳಿರೋಮಗಳು ಇಲ್ಲದಿದ್ದರೆ,
ಮಚ್ಚೆಯು ಚರ್ಮಕ್ಕಿಂತ ತಗ್ಗಾಗಿಲ್ಲದೆ ಮೊಬ್ಬಾಗಿ ಹೋಗಿ
ದ್ದರೆ, ಆಗ ಯಾಜಕನು ಆ ವ್ಯಕ್ತಿಯನ್ನು ಏಳು ದಿನ
ಗಳವರೆಗೆ ಪ್ರತ್ಯೇಕಿಸಬೇಕು. 22ಮಚ್ಚೆಯು ಚರ್ಮದಲ್ಲಿ
ಹರಡಿದರೆ, ಯಾಜಕನು ಅವನನ್ನು ಅಶುದ್ಧನೆಂದು ಪ್ರಕ
ಟಿಸಬೇಕು. ಅದು ಸೋಂಕುರೋಗವಾಗಿದೆ. 23ಆದರೆ
ಹೊಳೆಯುವ ಮಚ್ಚೆಯು ತನ್ನ ಸ್ಥಳದಲ್ಲಿಯೇ ಇದ್ದು
ಹರಡದಿದ್ದರೆ, ಆಗ ಅದು ಹುಣ್ಣಿನ ಮಚ್ಚೆಯಾಗಿದೆ.
ಯಾಜಕನು ಅವನನ್ನು ಶುದ್ಧನೆಂದು ಪ್ರಕಟಿಸಬೇಕು.

24-25''ಒಬ್ಬನ ದೇಹದ ಚರ್ಮದಲ್ಲಿ ಬೆಂಕಿಯಿಂದ
ಸುಟ್ಟಗಾಯ ಉಂಟಾಗಬಹುದು. ಹಸಿಯಾದ ಚರ್ಮವು
ಬೆಳ್ಳಗಾಗಿದ್ದರೆ, ಕೆಂಪುಬಿಳುಪು ಮಿಶ್ರವಾದ ಮಚ್ಚೆಯುಳ್ಳ
ದ್ದಾಗಿದ್ದರೆ, ಯಾಜಕನು ಅದನ್ನು ಪರೀಕ್ಷಿಸಬೇಕು. ಆ
ಬಿಳಿ ಕಲೆ ಚರ್ಮಕ್ಕಿಂತ ತಗ್ಗಾಗಿದ್ದರೆ ಮತ್ತು ಆ ಕಲೆಯಲ್ಲಿನ
ರೋಮವು ಬೆಳ್ಳಗಾಗಿದ್ದರೆ, ಅದು ಕುಷ್ಠರೋಗವಾಗಿದೆ.
ಆ ಕುಷ್ಠವು ಸುಟ್ಟಗಾಯದಲ್ಲಿ ಹುಟ್ಟಿದ್ದಾಗಿದೆ. ಆಗ
ಯಾಜಕನು ಆ ವ್ಯಕ್ತಿಯನ್ನು ಅಶುದ್ಧನೆಂದು ಪ್ರಕಟಿಸ
ಬೇಕು. ಅದು ಕುಷ್ಠರೋಗವಾಗಿದೆ. 26ಆದರೆ ಯಾಜ
ಕನು ಮಚ್ಚೆಯನ್ನು ನೋಡಲಾಗಿ ಹೊಳೆಯುವ ಮಚ್ಚೆ
ಯಲ್ಲಿ ಬಿಳಿರೋಮವಿಲ್ಲದೆ ಮತ್ತು ಮಚ್ಚೆಯು ಚರ್ಮ
ಕ್ಕಿಂತ ತಗ್ಗಾಗಿಲ್ಲದೆ ಮೊಬ್ಬಾಗಿ ಹೋಗುತ್ತಿದ್ದರೆ, ಯಾಜ
ಕನು ಆ ವ್ಯಕ್ತಿಯನ್ನು ಏಳು ದಿನಗಳವರೆಗೆ ಪ್ರತ್ಯೇಕವಾಗಿ
ಇರಿಸಬೇಕು. 27ಏಳನೆಯ ದಿನದಲ್ಲಿ ಯಾಜಕನು ಮತ್ತೆ
ಆ ವ್ಯಕ್ತಿಯನ್ನು ಪರೀಕ್ಷಿಸಬೇಕು. ಮಚ್ಚೆಯು ಚರ್ಮದ
ಮೇಲೆ ಹರಡಿದ್ದರೆ, ಯಾಜಕನು ಆ ವ್ಯಕ್ತಿಯನ್ನು ಅಶುದ್ಧ
ನೆಂದು ಪ್ರಕಟಿಸಬೇಕು. ಅದು ಕುಷ್ಠರೋಗವಾಗಿದೆ.
28ಆದರೆ ಹೊಳೆಯುವ ಮಚ್ಚೆಯು ಚರ್ಮದ ಮೇಲೆ
ಹರಡದೆ ಮೊಬ್ಬಾಗುತ್ತಿದ್ದರೆ, ಅದು ಸುಟ್ಟಗಾಯದಿಂದ
ಉಂಟಾದ ಊತವಾಗಿದೆ. ಯಾಜಕನು ಆ ವ್ಯಕ್ತಿಯನ್ನು
ಶುದ್ಧನೆಂದು ಪ್ರಕಟಿಸಬೇಕು. ಅದು ಕೇವಲ ಸುಟ್ಟಗಾಯ
ದಿಂದ ಉಂಟಾದ ಮಚ್ಚೆಯಾಗಿದೆ.

29''ಒಬ್ಬ ಗಂಡಸಿನ ಅಥವಾ ಹೆಂಗಸಿನ ತಲೆಯಲ್ಲಿ
(ನೆತ್ತಿಯಲ್ಲಿ) ಅಥವಾ ಗಡ್ಡದಲ್ಲಿ (ಗಲ್ಲ) ಸೋಂಕು ತಗಲಿ
ಕಲೆ ಉಂಟಾಗಬಹುದು. 30ಯಾಜಕನು ಆ ಹುಣ್ಣನ್ನು
ನೋಡಬೇಕು. ಸೋಂಕಿನ ಕಲೆಯು ಚರ್ಮಕ್ಕಿಂತ ತಗ್ಗಾಗಿ
ದ್ದರೆ ಮತ್ತು ಅದರಲ್ಲಿರುವ ರೋಮವು ತೆಳ್ಳಗಾಗಿಯೂ
ಹಳದಿಯಾಗಿಯೂ ಇದ್ದರೆ, ಯಾಜಕನು ಆ ವ್ಯಕ್ತಿಯನ್ನು
ಅಶುದ್ಧನೆಂದು ಪ್ರಕಟಿಸಬೇಕು. ಅದು ತಲೆಯ ಅಥವಾ
ಗಲ್ಲದ ಕೆಟ್ಟ ಚರ್ಮರೋಗವಾಗಿದೆ. 31ರೋಗವು ಚರ್ಮ
ಕ್ಕಿಂತ ತಗ್ಗಾಗಿಲ್ಲವೆಂದು ಕಂಡುಬಂದರೂ ಅದರಲ್ಲಿ
ಕಪ್ಪಾದ ಕೂದಲು ಇಲ್ಲದಿದ್ದರೆ, ಆಗ ಯಾಜಕನು ಆ ವ್ಯಕ್ತಿ
ಯನ್ನು ಏಳು ದಿನಗಳವರೆಗೆ ಪ್ರತ್ಯೇಕವಾಗಿರಿಸಬೇಕು.
32ಏಳನೆಯ ದಿನದಲ್ಲಿ ಯಾಜಕನು ಸೋಂಕು ತಗಲಿದ
ಜಾಗವನ್ನು ಪರೀಕ್ಷಿಸಬೇಕು. ರೋಗವು ಹರಡಿಕೊಳ್ಳದೆ
ಇದ್ದರೆ ಮತ್ತು ಅದು ಇರುವ ಕಡೆ ಹಳದಿಬಣ್ಣದ ಕೂದಲು
ಬೆಳೆಯುತ್ತಿಲ್ಲವಾಗಿದ್ದರೆ ಮತ್ತು ರೋಗವು ಉಳಿದ
ಚರ್ಮಕ್ಕಿಂತ ತಗ್ಗಾಗಿ ತೋರದಿದ್ದರೆ, 33ಆಗ ಆ ವ್ಯಕ್ತಿಯು
ಕ್ಷೌರ ಮಾಡಿಸಿಕೊಳ್ಳಬೇಕು. ಆದರೆ ಅವನು ರೋಗ
ಇರುವ ಜಾಗದಲ್ಲಿ ಕ್ಷೌರಮಾಡಿಸಿಕೊಳ್ಳಬಾರದು.
ಯಾಜಕನು ಆ ವ್ಯಕ್ತಿಯನ್ನು ಇನ್ನೂ ಏಳು ದಿನಗಳವರೆಗೆ
ಪ್ರತ್ಯೇಕವಾಗಿ ಇರಿಸಬೇಕು. 34ಏಳನೆಯ ದಿನದಲ್ಲಿ
ಯಾಜಕನು ರೋಗವನ್ನು ಪರೀಕ್ಷಿಸಬೇಕು. ರೋಗವು
ಚರ್ಮದಲ್ಲಿ ಹರಡಿಕೊಳ್ಳದಿದ್ದರೆ ಮತ್ತು ಅದು ಚರ್ಮ
ಕ್ಕಿಂತ ತಗ್ಗಾಗಿ ತೋರದಿದ್ದರೆ ಆಗ ಯಾಜಕನು ಆ ವ್ಯಕ್ತಿ
ಯನ್ನು ಶುದ್ಧನೆಂದು ಪ್ರಕಟಿಸಬೇಕು. ಅವನು ತನ್ನ ಬಟ್ಟೆ
ಗಳನ್ನು ತೊಳೆದುಕೊಂಡು ಶುದ್ಧನಾಗುವನು. 35ಆದರೆ
ಅವನು ಶುದ್ಧನಾದ ನಂತರ, ರೋಗವು ಚರ್ಮದ ಮೇಲೆ
ಹರಡಿದರೆ, 36ಯಾಜಕನು ಆ ವ್ಯಕ್ತಿಯನ್ನು (ಮತ್ತೆ)
ಪರೀಕ್ಷಿಸಬೇಕು. ರೋಗವು ಚರ್ಮದಲ್ಲಿ ಹರಡಿಕೊಂಡಿ
ದ್ದರೆ, ಯಾಜಕನು ಹಳದಿ ಬಣ್ಣದ ಕೂದಲು ಇದೆಯೋ
ಇಲ್ಲವೋ ಎಂದು ನೋಡಬೇಕಾದ ಅಗತ್ಯವಿಲ್ಲ. ಅವನು
ಅಶುದ್ಧನಾಗಿದ್ದಾನೆ. 37ಆದರೆ ರೋಗವು ನಿಂತುಹೋಗಿ,
ಕಪ್ಪಾದ ಕೂದಲು ಆ ಜಾಗದಲ್ಲಿ ಬೆಳೆಯುತ್ತಿದ್ದರೆ,
ರೋಗವು ವಾಸಿಯಾಗಿದೆ ಎಂದರ್ಥ. ಆ ವ್ಯಕ್ತಿಯು ಶುದ್ಧ
ನಾಗಿದ್ದಾನೆ. ಯಾಜಕನು ಅವನನ್ನು ಶುದ್ಧನೆಂದು
ಪ್ರಕಟಿಸಬೇಕು.

38''ಒಬ್ಬ ಗಂಡಸಿನ ಅಥವಾ ಹೆಂಗಸಿನ ಚರ್ಮದ
ಮೇಲೆ ಬಿಳಿ ಕಲೆಗಳು ಇದ್ದರೆ,

39ಆಗ ಯಾಜಕನು ಆ ಕಲೆಗಳನ್ನು ಪರೀಕ್ಷಿಸಬೇಕು.
ಆ ವ್ಯಕ್ತಿಯ ಚರ್ಮದ ಮೇಲಿರುವ ಕಲೆಗಳು ಬರೀ
ಮೊಬ್ಬಾದ ಬಿಳೀ ಬಣ್ಣದವು ಗಳಾಗಿದ್ದರೆ, ಆಗ ರೋಗವು

ಕೇವಲ ಚರ್ಮದಲ್ಲಿ ಹುಟ್ಟಿದ ಜಿಬ್ಬಾಗಿದೆ. ಆ ವ್ಯಕ್ತಿಯು
ಶುದ್ಧನಾಗಿದ್ದಾನೆ.

40‘‘ಒಬ್ಬ ಮನುಷ್ಯನ ತಲೆಗೂದಲು ಉದುರಿ ಹೋಗು
ತ್ತಿದ್ದರೆ ಅವನು ಶುದ್ಧನಾಗಿದ್ದಾನೆ. ಅವನು ಬೋಳು ತಲೆ
ಯವನಷ್ಟೆ. 41ಒಬ್ಬನ ತಲೆಯ ಪಾರ್ಶ್ವಗಳಿಂದ ಕೂದಲು
ಉದುರಿಹೋಗುತ್ತಿದ್ದರೆ ಅವನು ಶುದ್ಧನಾಗಿದ್ದಾನೆ. ಅದು
ಕೇವಲ ಇನ್ನೊಂದು ರೀತಿಯ ಬೋಳುತಲೆಯಷ್ಟೆ.
42ಆದರೆ ಅವನ ನೆತ್ತಿಯ ಮೇಲೆ ಕೆಂಪು ಬಿಳುಪು ಮಿಶ್ರಿತ
ವಾದ ಸೋಂಕಿನ ಚಿಹ್ನೆ ಇದ್ದರೆ, ಅದು ಚರ್ಮ ರೋಗ
ವಾಗಿದೆ. 43ಯಾಜಕನು ಆ ವ್ಯಕ್ತಿಯನ್ನು ಪರೀಕ್ಷಿಸಬೇಕು.
ಸೋಂಕು ತಗಲಿದ್ದರಿಂದ ಉಂಟಾದ ಊತ ಕೆಂಪು
ಬಿಳುಪು ಮಿಶ್ರವಾಗಿ ಚರ್ಮದಲ್ಲಿ ಕುಷ್ಠದಂತೆ ತೋರಿದರೆ,
44ಆಗ ಆ ವ್ಯಕ್ತಿಯ ತಲೆಯಲ್ಲಿ ಕುಷ್ಠರೋಗವಿದೆ. ಅವನು
ಅಶುದ್ಧನಾಗಿದ್ದಾನೆ. ಯಾಜಕನು ಅವನನ್ನು ಅಶುದ್ಧ
ನೆಂದು ಪ್ರಕಟಿಸಬೇಕು.

45‘‘ಒಬ್ಬನಿಗೆ ಕುಷ್ಠರೋಗವಿದ್ದರೆ, (ಅವನು ಬೇರೆ
ಜನರಿಗೆ ಎಚ್ಚರಿಕೆ ಕೊಡಬೇಕು,) ‘ನಾನು ಅಶುದ್ಧನು,
ಅಶುದ್ಧನು’ ಎಂದು ಅವನು ಕೂಗಿಕೊಳ್ಳಬೇಕು. ಆ
ವ್ಯಕ್ತಿಯು ತನ್ನ ಬಟ್ಟೆಗಳನ್ನು ಹರಿದುಕೊಂಡಿರಬೇಕು; ತನ್ನ
ಕೂದಲನ್ನು ಕೆದರಿಕೊಂಡಿರಬೇಕು; ತನ್ನ ಬಾಯಿಯನ್ನು
ಬಟ್ಟೆಯಿಂದ ಮುಚ್ಚಿಕೊಂಡಿರಬೇಕು. 46ಆ ವ್ಯಕ್ತಿಯು
ತನಗೆ ರೋಗವಿರುವ ಕಾಲವೆಲ್ಲಾ ಅಶುದ್ಧನಾಗಿರುವನು.
ಆ ವ್ಯಕ್ತಿಯು ಅಶುದ್ಧನಾಗಿದ್ದಾನೆ. ಅವನು ಒಂಟಿಯಾಗಿ
ವಾಸಿಸಬೇಕು. ಅವನ ನಿವಾಸವು ಪಾಳೆಯದ ಹೊರಗೆ
ಇರಬೇಕು.

47-48‘‘ಕೆಲವು ಬಟ್ಟೆಗಳಲ್ಲಿ ಬೂಷ್ಟು ಇರಬಹುದು.
ಅದು ನಾರಿನ ಬಟ್ಟೆಯಾಗಲೀ, ಉಣ್ಣೆ ಬಟ್ಟೆಯಾಗಲೀ
ಆಗಿರಬಹುದು. ಅದು ಹೆಣೆದ ಅಥವಾ ಹೊಲಿದ ಬಟ್ಟೆ
ಯಾಗಿರಬಹುದು. ಚರ್ಮದಿಂದ ಮಾಡಿದ ವಸ್ತುವಿನ
ಮೇಲೂ ಬೂಷ್ಟು ಇರಬಹುದು. 49ಹಸಿರು ಅಥವಾ
ಕೆಂಪು ಬಣ್ಣದ ಬೂಷ್ಟು ಬಟ್ಟೆಯ, ಚರ್ಮದ, ನೇಯ್ದ
ಮತ್ತು ಹೆಣೆದ ಸಾಮಾಗ್ರಿಗಳ ಮೇಲೆ ಇದ್ದರೆ, ಆಗ ಅದನ್ನು
ಯಾಜಕನಿಗೆ ತೋರಿಸಬೇಕು. 50ಯಾಜಕನು ಬೂಷ್ಟನ್ನು
ನೋಡಬೇಕು. ಅವನು ಆ ವಸ್ತುವನ್ನು ಏಳು ದಿನಗಳ
ವರೆಗೆ ಪ್ರತ್ಯೇಕವಾದ ಸ್ಥಳದಲ್ಲಿರಿಸಬೇಕು. 51-52ಏಳನೆಯ
ದಿನದಲ್ಲಿ ಯಾಜಕನು ಬೂಷ್ಟನ್ನು ಪರೀಕ್ಷಿಸಬೇಕು. ಅದು
ಚರ್ಮದ ಮೇಲಾಗಲೀ ಬಟ್ಟೆಯ ಮೇಲಾಗಲೀ ನೇಯ್ದ
ಅಥವಾ ಹೆಣೆದ ಬಟ್ಟೆಯ ಮೇಲಾಗಲೀ ಇದ್ದರೆ ಅದನ್ನು
ಪರೀಕ್ಷಿಸಬೇಕು. ಯಾವುದೇ ತೊಗಲಿನ ಮೇಲಿ ದ್ದರೂ
ಅದನ್ನು ಪರೀಕ್ಷಿಸಬೇಕು. ಬೂಷ್ಟು ಹರಡಿದ್ದರೆ, ಆ ಬಟ್ಟೆ
ಅಥವಾ ತೊಗಲು ಅಶುದ್ಧವಾಗಿವೆ. ಯಾಜಕನು ಅದನ್ನು
ಸುಟ್ಟುಹಾಕಬೇಕು.

53‘‘ಬೂಷ್ಟು ಬಟ್ಟೆಯ ಮೇಲಾಗಲೀ ಚರ್ಮದ
ಮೇಲಾಗಲೀ ನೇಯ್ದ ಅಥವಾ ಹೆಣೆದ ಬಟ್ಟೆಯ ಮೇಲಾ
ಗಲೀ ಹರಡಿಲ್ಲವೆಂದು ಯಾಜಕನು ಕಂಡರೆ, ಅದನ್ನು
ತೊಳೆಯಬೇಕು. 54ಯಾಜಕನು ಆ ತೊಗಲನ್ನು ಅಥವಾ
ಬಟ್ಟೆಯನ್ನು ತೊಳೆಯಲು ಜನರಿಗೆ ಅಪ್ಪಣೆಕೊಡಬೇಕು.
ಬಳಿಕ ಯಾಜಕನು ಆ ಬಟ್ಟೆಯನ್ನು ಇನ್ನೂ ಏಳು ದಿನ
ಗಳವರಗೆ ಪ್ರತ್ಯೇಕವಾಗಿರಿಸಬೇಕು. 55ಆ ಸಮಯದ
ನಂತರ ಯಾಜಕನು ಅದನ್ನು ತಿರುಗಿ ಪರೀಕ್ಷಿಸಬೇಕು.
ಬೂಷ್ಟು ಇನ್ನೂ ಹಾಗೆಯೇ ಇರುವಂತೆ ಕಂಡರೆ, ಆಗ ಆ
ವಸ್ತು ಅಶುದ್ಧವಾಗಿದೆ. ಅದು ಹರಡಲಿಲ್ಲದಿದ್ದರೂ ನೀವು
ಬಟ್ಟೆಯನ್ನು ಅಥವಾ ತೊಗಲನ್ನು ಸುಟ್ಟುಹಾಕಬೇಕು.

56‘‘ಆದರೆ ಯಾಜಕನು ತೊಗಲನ್ನಾಗಲೀ ಬಟ್ಟೆಯ
ನ್ನಾಗಲೀ ನೋಡಿದಾಗ, ತೊಳೆದ ನಂತರ ಬೂಷ್ಟು
ಮೊಬ್ಬಾಗಿರುವುದನ್ನು ಕಂಡರೆ, ಆಗ ಯಾಜಕನು ಕಲೆ
ಇರುವ ಆ ಬಟ್ಟೆಯ ಅಥವಾ ತೊಗಲಿನ ಭಾಗವನ್ನು
ಕತ್ತರಿಸಿ ಹಾಕಬೇಕು. (ಅದು ನೇಯ್ದ ಬಟ್ಟೆಯಾಗಿದ್ದರೂ
ಸರಿ, ಹೆಣೆದ ಬಟ್ಟೆಯಾಗಿದ್ದರೂ ಸರಿ.) 57ಆದರೆ ಬೂಷ್ಟು
ಆ ತೊಗಲಿನ ಮೇಲೆ ಅಥವಾ ಬಟ್ಟೆಯ ಮೇಲೆ ಮರಳಿ
ಬಂದರೆ, ಆಗ ಆ ಬೂಷ್ಟು ಹರಡುತ್ತಿದೆ ಎಂದರ್ಥ. ಆ
ತೊಗಲನ್ನು ಅಥವಾ ಆ ಬಟ್ಟೆಯನ್ನು ಸುಟ್ಟುಹಾಕಬೇಕು.
58ಆದರೆ, ತೊಳೆದ ನಂತರ ಬೂಷ್ಟು ತಿರುಗಿಬಾರದಿದ್ದರೆ,
ಆ ತೊಗಲು ಅಥವಾ ಬಟ್ಟೆ ಶುದ್ಧವಾಗಿದೆ. ಅದು ಹೆಣೆದ
ಅಥವಾ ಹೊಲಿದ ಬಟ್ಟೆಯಾಗಿದ್ದರೂ ಶುದ್ಧವಾಗಿದೆ.’’

59ಚರ್ಮದ ವಸ್ತುಗಳ ಮೇಲಾಗಲೀ ಬಟ್ಟೆಯ ಮೇಲಾ
ಗಲೀ (ಅದು ಉಣ್ಣೆಯದ್ದಾಗಿರಲೀ ನಾರಿನದ್ದಾಗಿರಲೀ
ನೇಯ್ದದ್ದಾಗಿರಲೀ ಅಥವಾ ಹೆಣೆದದ್ದಾಗಿರಲೀ) ಕಂಡು
ಬರುವ ಬೂಷ್ಟಿನ ವಿಷಯದಲ್ಲಿ ಅನುಸರಿಸಬೇಕಾದ
ನಿಯಮಗಳು ಇವೇ, ಶುದ್ಧವಾದವುಗಳೋ ಅಶುದ್ಧ
ವಾದವುಗಳೋ ಎಂದು ನಿರ್ಧಾರ ಮಾಡಲು ಇದೇ
ನಿಯಮಗಳನ್ನು ಅನುಸರಿಸಬೇಕು.

### ಚರ್ಮರೋಗಿಯ ಶುದ್ಧೀಕರಣ

14 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ಚರ್ಮರೋಗವಿದ್ದು ವಾಸಿಯಾದ ಜನರು
ಅನುಸರಿಸಬೇಕಾದ ನಿಯಮಗಳು ಇಂತಿವೆ. ಇವರನ್ನು
ಶುದ್ಧೀಕರಣ (ಆಚಾರಗಳು)ಕ್ಕಾಗಿ ಯಾಜಕನ ಬಳಿಗೆ
ಕರೆದುಕೊಂಡು ಬಂದಾಗ, ಅನುಸರಿಸತಕ್ಕ ನಿಯಮಗಳು
ಯಾವುವೆಂದರೆ:

‘‘ಚರ್ಮರೋಗವಿದ್ದ ವ್ಯಕ್ತಿಯನ್ನು ಯಾಜಕನು
ಪರೀಕ್ಷಿಸಬೇಕು. 3ಯಾಜಕನು ಪಾಳೆಯದ ಹೊರಗೆ
ಹೋಗಿ ಆ ವ್ಯಕ್ತಿಯ ಚರ್ಮರೋಗ ವಾಸಿಯಾಗಿದೆಯೋ
ಇಲ್ಲವೋ ಎಂದು ನೋಡಬೇಕು. 4ಆ ವ್ಯಕ್ತಿಯು

ಆರೋಗ್ಯವಂತನಾಗಿದ್ದರೆ, ಆಗ ಯಾಜಕನು ಈ ಸಂಗತಿ
ಗಳನ್ನು ಮಾಡುವುದಕ್ಕೆ ಅವನಿಗೆ ಹೇಳುವನು. ಆ
ವ್ಯಕ್ತಿಯು ಎರಡು ಜೀವಂತವಾದ ಶುದ್ಧ ಪಕ್ಷಿಗಳನ್ನು ತರ
ಬೇಕು. ಅಲ್ಲದೆ, ಅವನು ದೇವದಾರುಮರದ ತುಂಡನ್ನು,
ಕೆಂಪು ಬಣ್ಣದ ಬಟ್ಟೆಯ ತುಂಡನ್ನು ಮತ್ತು ಹಿಸ್ಸೋಪ್
ಗಿಡದ ಬರಲನ್ನು ತರಬೇಕು. 5ಬಳಿಕ ಒಂದು ಪಕ್ಷಿಯನ್ನು
ಸೆಲೇ ನೀರಿನ ಮೇಲೆ ಮಣ್ಣಿನ ಪಾತ್ರೆಯಲ್ಲಿ ವಧಿಸ
ಬೇಕೆಂದು ಯಾಜಕನು ಅಪ್ಪಣೆಕೊಡಬೇಕು. 6ಯಾಜ
ಕನು ಸಜೀವವಾದ ಎರಡನೆಯ ಪಕ್ಷಿಯನ್ನು, ದೇವದಾರು
ಮರದ ತುಂಡನ್ನು, ಕೆಂಪುಬಣ್ಣದ ಬಟ್ಟೆಯ ತುಂಡನ್ನು
ಮತ್ತು ಹಿಸ್ಸೋಪ್ ಗಿಡವನ್ನು ತೆಗೆದುಕೊಳ್ಳಬೇಕು. ಸೆಲೇ
ನೀರಿನ ಮೇಲೆ ವಧಿಸಲ್ಪಟ್ಟ ಪಕ್ಷಿಯ ರಕ್ತದಲ್ಲಿ ಜೀವಂತ
ವಾಗಿರುವ ಪಕ್ಷಿಯನ್ನು ಮತ್ತು ಇತರ ವಸ್ತುಗಳನ್ನು ಅದ್ದ
ಬೇಕು. 7ಯಾಜಕನು ಚರ್ಮರೋಗವಿದ್ದ ವ್ಯಕ್ತಿಯ
ಮೇಲೆ ರಕ್ತವನ್ನು ಏಳುಸಲ ಚಿಮಿಕಿಸಬೇಕು. ಬಳಿಕ
ಯಾಜಕನು ಆ ವ್ಯಕ್ತಿಯನ್ನು ಶುದ್ಧನೆಂದು ಪ್ರಕಟಿಸ
ಬೇಕು. ಬಳಿಕ ಯಾಜಕನು ಬಯಲಿಗೆ ಹೋಗಿ ಜೀವಂತ
ವಾಗಿರುವ ಪಕ್ಷಿಯನ್ನು ಬಿಟ್ಟುಬಿಡಬೇಕು.

8"ಬಳಿಕ ಆ ವ್ಯಕ್ತಿ ತನ್ನ ಬಟ್ಟೆಗಳನ್ನು ತೊಳೆದುಕೊಳ್ಳ
ಬೇಕು. ಅವನು ಸರ್ವಾಂಗಕ್ಷೌರ ಮಾಡಿಕೊಂಡು ಸ್ನಾನ
ಮಾಡಬೇಕು. ಆಗ ಅವನು ಶುದ್ಧನಾಗುವನು. ಬಳಿಕ ಆ
ವ್ಯಕ್ತಿ ಪಾಳೆಯದೊಳಗೆ ಹೋಗಬಹುದು. ಆದರೆ ಅವನು
ತನ್ನ ಡೇರೆಯಿಂದ ಏಳು ದಿನಗಳವರೆಗೆ ಹೊರಗೆ ಇರ
ಬೇಕು. 9ಏಳನೆಯ ದಿನದಲ್ಲಿ ಅವನು ತನ್ನ ಎಲ್ಲಾ ಕೂದ
ಲನ್ನು ಕ್ಷೌರಮಾಡಿಕೊಳ್ಳಬೇಕು. ಅವನು ತನ್ನ ತಲೆಯ,
ಗಡ್ಡದ ಮತ್ತು ಹುಬ್ಬಿನ ಕೂದಲನ್ನು, ಹೌದು, ಎಲ್ಲಾ
ಕೂದಲನ್ನು ಕ್ಷೌರಮಾಡಿಸಿಕೊಳ್ಳಬೇಕು. ಬಳಿಕ ಅವನು
ತನ್ನ ಬಟ್ಟೆಗಳನ್ನು ತೊಳೆದು ನೀರಿನಲ್ಲಿ ಸ್ನಾನಮಾಡಬೇಕು.
ಅಂದಿನಿಂದ ಅವನು ಶುದ್ಧನಾಗಿರುವನು.

10"ಎಂಟನೆಯ ದಿನದಲ್ಲಿ ಅವನು ಯಾವ ದೋಷ
ವಿಲ್ಲದ ಎರಡು ಟಗರುಗಳನ್ನು ಒಂದು ವರ್ಷದ ಹೆಣ್ಣು
ಕುರಿಮರಿಯನ್ನೂ ಎಣ್ಣೆ ಬೆರೆಸಿದ ಇಪ್ಪತ್ತನಾಲ್ಕು
ಬಟ್ಟಲು* ಶ್ರೇಷ್ಠ ಗೋಧಿಹಿಟ್ಟನ್ನೂ ತೆಗೆದುಕೊಂಡು
ಬರಬೇಕು. ಈ ಶ್ರೇಷ್ಠ ಗೋಧಿಹಿಟ್ಟು ಧಾನ್ಯ ನೈವೇದ್ಯ
ಕ್ಕಾಗಿರುತ್ತದೆ. ಅವನು ಒಂದು ಸೇರು* ಆಲಿವ್ ಎಣ್ಣೆ
ಯನ್ನೂ ತೆಗೆದುಕೊಂಡು ಬರಬೇಕು. 11ಯಾಜಕನು ಅವ
ನನ್ನೂ ಅವನ ಸಮರ್ಪಣೆಗಳನ್ನೂ ದೇವದರ್ಶನ
ಗುಡಾರದ ಬಾಗಿಲಿನಲ್ಲಿ ಯೆಹೋವನ ಸನ್ನಿಧಿಗೆ ತೆಗೆದು
ಕೊಂಡು ಬರಬೇಕು. (ಈ ಯಾಜಕನೇ ಅವನನ್ನು ಶುದ್ಧ
ನೆಂದು ಪ್ರಕಟಿಸುವವನಾಗಿರುತ್ತಾನೆ.) 12ಯಾಜಕನು
ಟಗರುಗಳಲ್ಲಿ ಒಂದನ್ನು ದೋಷ ಪರಿಹಾರಕ ಯಜ್ಞವಾಗಿ
ಅರ್ಪಿಸುವನು. ಅವನು ಆ ಟಗರನ್ನೂ ಎಣ್ಣೆಯನ್ನೂ
ಯೆಹೋವನ ಸನ್ನಿಧಿಯಲ್ಲಿ ನೈವೇದ್ಯ ಸಮರ್ಪಣೆಯಾಗಿ
ನಿವಾಳಿಸುವನು. 13ಬಳಿಕ ಯಾಜಕನು ಪಾಪಪರಿಹಾರಕ
ಮತ್ತು ಸರ್ವಾಂಗಹೋಮ ಯಜ್ಞಪಶುಗಳನ್ನು ವಧಿಸುವ
ಪವಿತ್ರಸ್ಥಳದಲ್ಲಿ ಟಗರನ್ನು ವಧಿಸುವನು. ದೋಷ ಪರಿ
ಹಾರಕ ಯಜ್ಞವು ಪಾಪಪರಿಹಾರಕ ಯಜ್ಞದಂತಿದೆ. ಅದು
ಯಾಜಕನಿಗೆ ಸೇರುತ್ತದೆ. ಅದು ಬಹಳ ಪವಿತ್ರವಾಗಿದೆ.

14"ಯಾಜಕನು ದೋಷಪರಿಹಾರಕ ಯಜ್ಞಪಶುವಿನ
ರಕ್ತದಿಂದ ಸ್ವಲ್ಪವನ್ನು ತೆಗೆದುಕೊಂಡು ಶುದ್ಧನಾಗಿ ಮಾಡ
ಲ್ಪಡುವ ವ್ಯಕ್ತಿಯ ಬಲಗಿವಿಯ ತುದಿಗೂ ಬಲಗೈಯ ಹೆಬ್ಬೆ
ರಳಿಗೂ ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚಬೇಕು. 15ಅಲ್ಲದೆ
ಯಾಜಕನು ಸ್ವಲ್ಪ ಎಣ್ಣೆಯನ್ನು ತೆಗೆದುಕೊಂಡು ತನ್ನ
ಎಡಗೈಗೆ ಹೊಯ್ದುಕೊಳ್ಳಬೇಕು. 16ಬಳಿಕ ಯಾಜಕನು
ತನ್ನ ಬಲಗೈಯ ಬೆರಳನ್ನು ತನ್ನ ಎಡಗೈಯಲ್ಲಿರುವ ಎಣ್ಣೆ
ಯಲ್ಲಿ ಅದ್ದಿ ಯೆಹೋವನ ಸನ್ನಿಧಿಯಲ್ಲಿ ಎಣ್ಣೆಯನ್ನು
ಏಳುಸಲ ಚಿಮಿಕಿಸಬೇಕು. 17ಯಾಜಕನು ತನ್ನ ಅಂಗೈ
ಯಲ್ಲಿರುವ ಎಣ್ಣೆಯಲ್ಲಿ ಸ್ವಲ್ಪವನ್ನು ಶುದ್ಧನಾಗಲಿರುವ
ವ್ಯಕ್ತಿಯ ದೋಷಪರಿಹಾರಕ ಯಜ್ಞಪಶುವಿನ ರಕ್ತವನ್ನು
ಹಚ್ಚಿದ ಸ್ಥಳದಲ್ಲಿಯೇ ಅಂದರೆ ಬಲಗಿವಿಯ ತುದಿಗೆ
ಬಲಗಾಲಿನ ಹೆಬ್ಬೆಟ್ಟಿಗೆ ಹಚ್ಚುವನು. 18ಯಾಜಕನು ತನ್ನ
ಅಂಗೈಯಲ್ಲಿ ಉಳಿದ ಎಣ್ಣೆಯನ್ನು ಶುದ್ಧನಾಗಿ ಮಾಡ
ಲ್ಪಡುವ ವ್ಯಕ್ತಿಯ ತಲೆಗೆ ಹಚ್ಚುವನು. ಹೀಗೆ ಯಾಜಕನು
ಆ ವ್ಯಕ್ತಿಯನ್ನು ಯೆಹೋವನ ಸನ್ನಿಧಿಯಲ್ಲಿ ಶುದ್ಧನನ್ನಾಗಿ
ಮಾಡುವನು.

19"ತರುವಾಯ ಯಾಜಕನು ಶುದ್ಧನಾಗಿ ಮಾಡಲ್ಪ
ಡುವ ವ್ಯಕ್ತಿಗಾಗಿ ಪಾಪಪರಿಹಾರಕ ಯಜ್ಞವನ್ನು ಅರ್ಪಿಸ
ಬೇಕು. ಯಾಜಕನು ಪಾಪಪರಿಹಾರಕಯಜ್ಞ ಮಾಡು
ವುದರ ಮೂಲಕ ಆ ವ್ಯಕ್ತಿಯ ಅಶುದ್ಧತ್ವಕ್ಕಾಗಿ ಪ್ರಾಯ
ಶ್ಚಿತ್ತ ಮಾಡುವನು. ಅದರ ನಂತರ ಸರ್ವಾಂಗ ಹೋಮ
ಕ್ಕಾಗಿ ಯಾಜಕನು ಎರಡನೆಯ ಟಗರನ್ನು ವಧಿಸುವನು.
20ಬಳಿಕ ಯಾಜಕನು ಯಜ್ಞವೇದಿಕೆಯ ಮೇಲೆ
ಸರ್ವಾಂಗಹೋಮವನ್ನು ಮತ್ತು ಧಾನ್ಯಸಮರ್ಪಣೆ
ಯನ್ನು ಅರ್ಪಿಸುವನು. ಈ ರೀತಿಯಾಗಿ ಯಾಜಕನು ಆ
ವ್ಯಕ್ತಿಗಾಗಿ, ಪ್ರಾಯಶ್ಚಿತ್ತ ಮಾಡುವನು. ಆಗ ಅವನು
ಶುದ್ಧನಾಗುವನು.

21"ಆದರೆ ಅವನು ಬಡವನಾಗಿದ್ದು ಆ
ಸಮರ್ಪಣೆಗಳನ್ನು ಕೊಡುವುದಕ್ಕೆ ಅಶಕ್ತನಾಗಿದ್ದರೆ, ಆಗ
ಅವನು ದೋಷಪರಿಹಾರಕ್ಕಾಗಿ ಒಂದು ಟಗರನ್ನು ತೆಗೆದು
ಕೊಳ್ಳಬೇಕು. ಅದು ಯೆಹೋವನಿಗೆ ನೈವೇದ್ಯವಾಗಿ
ನಿವಾಳಿಸಲ್ಪಡುವ ಅರ್ಪಣೆಯಾಗಿರುವುದು. ಹೀಗೆ
ಯಾಜಕನು ಆ ವ್ಯಕ್ತಿಯನ್ನು ಶುದ್ಧಿ ಮಾಡಬಹುದು

---

**24ಬಟ್ಟಲು ಅಕ್ಷರಶಃ** "3/10" ಬಹುಶಃ 3/10 ಏಫಾ.

**ಸೇರು** ಅಂದರೆ 1/8 ಗ್ಯಾಲನ್.

(ಪ್ರಾಯಶ್ಚಿತ್ತ ಮಾಡಬಹುದು). ಅವನು ಎಣ್ಣೆ ಬೆರಸಿದ
ಮೂರು. ಸೇರು, ಶ್ರೇಷ್ಠ ಗೋಧಿಹಿಟ್ಟನ್ನು ತೆಗೆದು
ಕೊಳ್ಳಬೇಕು. ಗೋಧಿಹಿಟ್ಟು ಧಾನ್ಯಸಮರ್ಪಣೆಯಾಗಿ
ಉಪಯೋಗಿಸಲ್ಪಡುವುದು. ಅವನು ಒಂದು ಸೇರು
ಆಲಿವ್ ಎಣ್ಣೆಯನ್ನು, 22ಎರಡು ಬೆಳವಕ್ಕಿಗಳನ್ನು ಮತ್ತು
ಎರಡು ಪಾರಿವಾಳ ಮರಿಗಳನ್ನು ತೆಗೆದುಕೊಳ್ಳಬೇಕು.
ಬಡವರು ಸಹ ಅವುಗಳನ್ನು ಕೊಡಲು ಶಕ್ತರಾಗಿರುವರು.
ಒಂದು ಪಕ್ಷಿಯು ಪಾಪಪರಿಹಾರಕ ಯಜ್ಞಕ್ಕಾಗಿಯೂ
ಇನ್ನೊಂದು ಪಕ್ಷಿಯು ಸರ್ವಾಂಗಹೋಮಕ್ಕಾಗಿಯೂ
ಇರುತ್ತದೆ.

23‘‘ಎಂಟನೆಯ ದಿನದಲ್ಲಿ, ಅವನು ಅವುಗಳನ್ನು ದೇವ
ದರ್ಶನ ಗುಡಾರದ ಬಾಗಿಲಿಗೆ ಯಾಜಕನ ಬಳಿಗೆ ತರ
ಬೇಕು. ಅವನು ಶುದ್ಧನಾಗುವಂತೆ ಅವುಗಳನ್ನು
ಯೆಹೋವನ ಸನ್ನಿಧಿಯಲ್ಲಿ ಸಮರ್ಪಿಸಬೇಕು. 24ದೋಷ
ಪರಿಹಾರಕ್ಕಾಗಿ ತಂದ ಕುರಿಮರಿಯನ್ನು ಮತ್ತು ಎಣ್ಣೆ
ಯನ್ನು ಯಾಜಕನು ತೆಗೆದುಕೊಂಡು, ಅವುಗಳನ್ನು
ಯೆಹೋವನ ಸನ್ನಿಧಿಯಲ್ಲಿ ನೈವೇದ್ಯವಾಗಿ ನಿವಾಳಿಸ
ಬೇಕು. 25ಬಳಿಕ ದೋಷಪರಿಹಾರಕ ಯಜ್ಞವಾದ ಕುರಿ
ಮರಿಯನ್ನು ಯಾಜಕನು ವಧಿಸುವನು. ಯಾಜಕನು
ದೋಷಪರಿಹಾರಕ ಯಜ್ಞದ ರಕ್ತದಲ್ಲಿ ಸ್ವಲ್ಪವನ್ನು ತೆಗೆದು
ಕೊಂಡು ಶುದ್ಧೀಕರಿಸಲ್ಪಡುವ ವ್ಯಕ್ತಿಯ ಬಲಗಿವಿಯ
ತುದಿಗೂ ಬಲಗೈಯ ಹೆಬ್ಬೆರಳಿಗೂ ಬಲಗಾಲಿನ ಹೆಬ್ಬೆ
ಟ್ಟಿಗೂ ಹಚ್ಚಬೇಕು. 26ಅಲ್ಲದೆ ಯಾಜಕನು ಈ ಎಣ್ಣೆ
ಯಲ್ಲಿ ಸ್ವಲ್ಪವನ್ನು ಅವನ ಎಡಗೈಗೆ ಹೊಯ್ಯಬೇಕು. 27ತನ್ನ
ಎಡಗೈಯಲ್ಲಿರುವ ಎಣ್ಣೆಯನ್ನು ಯೆಹೋವನ ಸನ್ನಿಧಿ
ಯಲ್ಲಿ ಏಳುಸಲ ತನ್ನ ಬಲಗೈಯ ಬೆರಳಿನಿಂದ ಚಿಮಿಕಿಸು
ವನು. 28ಬಳಿಕ ತನ್ನ ಅಂಗೈಯಲ್ಲಿರುವ ಎಣ್ಣೆಯಲ್ಲಿ
ಸ್ವಲ್ಪವನ್ನು ದೋಷಪರಿಹಾರಕ ಯಜ್ಞದ ರಕ್ತವನ್ನು
ಹಚ್ಚಿದ ಸ್ಥಳದಲ್ಲಿಯೇ ಹಚ್ಚುವನು; ಸ್ವಲ್ಪ ಎಣ್ಣೆಯನ್ನು
ಶುದ್ಧೀಕರಿಸಲ್ಪಡುವ ವ್ಯಕ್ತಿಯ ಬಲಗಿವಿಯ ತುದಿಗೆ ಹಚ್ಚ
ಬೇಕು; ಸ್ವಲ್ಪ ಎಣ್ಣೆಯನ್ನು ಬಲಗೈಯ ಹೆಬ್ಬೆರಳಿಗೆ ಹಚ್ಚ
ಬೇಕು; ಸ್ವಲ್ಪ ಎಣ್ಣೆಯನ್ನು ಬಲಗಾಲಿನ ಹೆಬ್ಬೆಟ್ಟಿಗೂ
ಹಚ್ಚಬೇಕು. 29ಯಾಜಕನು ತನ್ನ ಅಂಗೈಯಲ್ಲಿ ಉಳಿದ
ಎಣ್ಣೆಯನ್ನು ಶುದ್ಧೀಕರಿಸಲ್ಪಡುವ ವ್ಯಕ್ತಿಯ ತಲೆಗೆ ಹಚ್ಚ
ಬೇಕು. ಹೀಗೆ ಯಾಜಕನು ಆ ವ್ಯಕ್ತಿಯನ್ನು ಯೆಹೋವನ
ಸನ್ನಿಧಿಯಲ್ಲಿ ಶುದ್ಧೀಕರಿಸುವನು.

30‘‘ಬಳಿಕ ಯಾಜಕನು ಬೆಳವಕ್ಕಿಗಳಲ್ಲಿ ಅಥವಾ ಪಾರಿ
ವಾಳ ಮರಿಗಳಲ್ಲಿ ಒಂದನ್ನು ಸಮರ್ಪಿಸಬೇಕು (ಆ
ವ್ಯಕ್ತಿಯು ಯಾವುದನ್ನು ಕೊಡಲು ಶಕ್ತನಾಗಿದ್ದಾನೋ
ಅದನ್ನು ಅವನು ಸಮರ್ಪಿಸಬೇಕು.) 31ಅವನು ಈ ಪಕ್ಷಿ
ಗಳಲ್ಲಿ ಒಂದನ್ನು ಪಾಪಪರಿಹಾರಕ ಯಜ್ಞವಾಗಿಯೂ
ಇನ್ನೊಂದನ್ನು ಸರ್ವಾಂಗಹೋಮವಾಗಿಯೂ ಅರ್ಪಿಸ
ಬೇಕು. ಅವನು ಪಕ್ಷಿಗಳನ್ನು ಧಾನ್ಯಸಮರ್ಪಣೆಯೊಂದಿಗೆ
ಅರ್ಪಿಸಬೇಕು. ಹೀಗೆ ಯಾಜಕನು ಆ ವ್ಯಕ್ತಿಯ ಶುದ್ಧೀಕ
ರಣಕ್ಕಾಗಿ ಯೆಹೋವನ ಸನ್ನಿಧಿಯಲ್ಲಿ ಪ್ರಾಯಶ್ಚಿತ್ತ
ಮಾಡ ವನು; ಆಗ ಆ ವ್ಯಕ್ತಿ ಶುದ್ಧನಾಗುವನು.’’

32ಚರ್ಮರೋಗದಿಂದ ವಾಸಿಯಾದವನನ್ನು ಶುದ್ಧೀಕ
ರಿಸುವ ನಿಯಮಗಳು ಇವೇ. ಶುದ್ಧರಾಗಲು ವಿಧಿಬದ್ಧ
ವಾದ ಯಜ್ಞಗಳನ್ನು ಅರ್ಪಿಸುವುದಕ್ಕೆ ಶಕ್ತರಲ್ಲದ ಜನರಿ
ಗೋಸ್ಕರವಿರುವ ನಿಯಮಗಳು ಇವೇ.

## ಬೂಷ್ಟು ಮನೆಯಲ್ಲಿದ್ದರೆ ಅನುಸರಿಸಬೇಕಾದ ನಿಯಮಗಳು

33ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇ
ನೆಂದರೆ: 34‘‘ನಾನು ನಿಮ್ಮ ಜನರಿಗೆ ಕಾನಾನ್ ದೇಶವನ್ನು
ಕೊಡುತ್ತಿದ್ದೇನೆ. ನಿಮ್ಮ ಜನರು ಆ ದೇಶದಲ್ಲಿ ಪ್ರವೇಶಿಸಿ
ನೆಲೆಸುವರು. ಆಗ ಯಾರ ಮನೆಯಲ್ಲಾದರೂ ಬೂಷ್ಟು
ಉಂಟಾದರೆ, 35ಆ ಮನೆಯ ಯಾಜಮಾನನು ಬಂದು,
‘ನನ್ನ ಮನೆಯಲ್ಲಿ ಬೂಷ್ಟು ಬಂದಿದೆ’ ಎಂದು ಯಾಜಕನಿಗೆ
ಹೇಳಬೇಕು.

36‘‘ಆಗ ಯಾಜಕನು ಆ ಮನೆಯಿಂದ ಪ್ರತಿಯೊಂದು
ವಸ್ತುವನ್ನು ಹೊರತೆಗೆಯಲು ಆಜ್ಞಾಪಿಸಬೇಕು. ಯಾಜ
ಕನು ಬೂಷ್ಟನ್ನು ನೋಡಲು ಒಳಗೆ ಹೋಗುವುದಕ್ಕಿಂತ
ಮೊದಲು ಜನರು ಪ್ರತಿಯೊಂದು ವಸ್ತುವನ್ನು ತೆಗೆಯ
ಬೇಕು. ಆಗ ಯಾಜಕನು ಮನೆಯಲ್ಲಿರುವ ಪ್ರತಿ
ಯೊಂದು ವಸ್ತುವನ್ನು ಅಶುದ್ಧವೆಂದು ಹೇಳಬೇಕಾಗಿರು
ವುದಿಲ್ಲ. ಜನರು ಮನೆಯಿಂದ ಪ್ರತಿಯೊಂದು ವಸ್ತುವನ್ನು
ಹೊರಗೆ ತೆಗೆದನಂತರ ಯಾಜಕನು ಮನೆಯೊಳಗೆ
ಹೋಗುವನು. 37ಯಾಜಕನು ಬೂಷ್ಟನ್ನು ನೋಡುವನು.
ಗೋಡೆಗಳಲ್ಲಿರುವ ಬೂಷ್ಟಿನಲ್ಲಿ ರಂಧ್ರಗಳಿದ್ದು
(ತಗ್ಗಾಗಿದ್ದು) ಅದು ಹಸಿರು ಅಥವಾ ಕೆಂಪು ಬಣ್ಣದ್ದಾ
ಗಿದ್ದರೆ ಮತ್ತು ಬೂಷ್ಟು ಗೋಡೆಗಿಂತ ತಗ್ಗಾಗಿದ್ದರೆ, 38ಆಗ
ಯಾಜಕನು ಹೊರಗೆ ಹೋಗಿ ಮನೆಗೆ ಏಳು ದಿನಗಳವರೆಗೆ
ಬೀಗ ಹಾಕಿಸಬೇಕು.

39‘‘ಏಳನೆಯ ದಿನದಲ್ಲಿ ಯಾಜಕನು ಹಿಂತಿರುಗಿ
ಬಂದು ಮನೆಯನ್ನು ಪರೀಕ್ಷಿಸಬೇಕು. ಬೂಷ್ಟು ಮನೆಯ
ಗೋಡೆಗಳಲ್ಲಿ ಹರಡಿದ್ದರೆ, 40ಆಗ ಯಾಜಕನು ಬೂಷ್ಟು
ಇರುವ ಕಲ್ಲುಗಳನ್ನು ಒಡೆದುಹಾಕಿ ಬಿಸಾಡಬೇಕೆಂದು
ಆಜ್ಞಾಪಿಸಿಬೇಕು. ಅವರು ಆ ಕಲ್ಲುಗಳನ್ನು ಪಟ್ಟಣದ
ಹೊರಗಿರುವ ಪ್ರತ್ಯೇಕವಾದ ಅಶುದ್ಧ ಸ್ಥಳದಲ್ಲಿ ಹಾಕ
ಬೇಕು. 41ತರುವಾಯ ಯಾಜಕನು ಮನೆಯ ಒಳಗಿನ
ಗೋಡೆಯನ್ನೆಲ್ಲಾ ಕೆರೆಯಿಸಬೇಕು. ಜನರು ಕೆರೆದು
ಹಾಕುವ ಮಣ್ಣನ್ನು ಪಟ್ಟಣದ ಹೊರಗೆ ಎಸೆದುಬಿಡ
ಬೇಕು. ಅವರು ಅದನ್ನು ಪಟ್ಟಣದ ಹೊರಗಿರುವ

ಪ್ರತ್ಯೇಕವಾದ ಅಶುದ್ಧ ಸ್ಥಳದಲ್ಲಿ ಹಾಕಬೇಕು. [42]ಬಳಿಕ ಆ ವ್ಯಕ್ತಿಯು ಗೋಡೆಗಳಲ್ಲಿ ಹೊಸ ಕಲ್ಲುಗಳನ್ನು ಇಡಿಸಿ ಹೊಸ ಮಡ್ಡಿ ಮಾಡಿಸಬೇಕು.

[43]"ಒಂದುವೇಳೆ ಒಬ್ಬನು ಹಳೆಯಕಲ್ಲುಗಳನ್ನು ಮತ್ತು ಮಣ್ಣನ್ನು ತೆಗೆಸಿ ಹೊಸ ಕಲ್ಲುಗಳನ್ನು, ಮಣ್ಣನ್ನು ಮತ್ತು ಹೊಸ ಮಡ್ಡಿಯನ್ನು ಹಾಕಿಸಿದ್ದರೂ ಬೂಷ್ಟು ಮತ್ತೆ ಆ ಮನೆಯಲ್ಲಿ ಕಾಣಿಸಿಕೊಂಡರೆ, [44]ಯಾಜಕನು ಬಂದು ಆ ಮನೆಯನ್ನು ಪರೀಕ್ಷಿಸಬೇಕು. ರೋಗದ ಗುರುತು ಮನೆಯಲ್ಲಿ ಹರಡಿದ್ದರೆ, ಆಗ ಆದು ಬಹು ಬೇಗನೆ ಇತರ ಸ್ಥಳಗಳಿಗೆ ಹರಡುವ ರೋಗವಾಗಿದೆ. ಆದ್ದರಿಂದ ಆ ಮನೆಯು ಅಶುದ್ಧವಾಗಿದೆ. [45]ಆ ವ್ಯಕ್ತಿಯು ಆ ಮನೆಯನ್ನು ಕೆಡವಿ ಹಾಕಿಸಬೇಕು. ಅವರು ಆದರ ಎಲ್ಲಾ ಕಲ್ಲುಗಳನ್ನು, ಮಣ್ಣನ್ನು ಮತ್ತು ಮರದ ತುಂಡುಗಳನ್ನು ಪಟ್ಟಣದ ಹೊರಗಿರುವ ಪ್ರತ್ಯೇಕವಾದ ಅಶುದ್ಧ ಸ್ಥಳಕ್ಕೆ ತೆಗೆದುಕೊಂಡು ಹೋಗಬೇಕು. [46]ಮುಚ್ಚಲ್ಪಟ್ಟಿರುವ ಆ ಮನೆಯೊಳಗೆ ಯಾವನಾದರೂ ಹೋದರೆ, ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. [47]ಯಾವನಾದರೂ ಆ ಮನೆಯಲ್ಲಿ ಆಹಾರ ತಿಂದರೆ ಅಥವಾ ಅಲ್ಲಿ ಮಲಗಿಕೊಂಡರೆ ಅವನು ತನ್ನ ಬಟ್ಟೆಗಳನ್ನು ತೊಳೆದುಕೊಳ್ಳಬೇಕು. [48]"ಒಂದು ಮನೆಯಲ್ಲಿ ಹೊಸ ಕಲ್ಲುಗಳನ್ನು ಮತ್ತು ಮಣ್ಣನ್ನು (ಗಿಲಾವು) ಹಾಕಿಸಿದನಂತರ ಯಾಜಕನು ಅದನ್ನು ಪರೀಕ್ಷಿಸಬೇಕು. ಬೂಷ್ಟು ಮನೆಯಲ್ಲಿ ಹರಡ ದಿದ್ದರೆ, ಯಾಜಕನು ಮನೆಯನ್ನು ಶುದ್ಧವೆಂದು ಪ್ರಕಟಿಸುವನು.

[49]"ಬಳಿಕ ಮನೆಯನ್ನು ಶುದ್ಧೀಕರಿಸುವುದಕ್ಕೆ ಅವನು ಎರಡು ಪಕ್ಷಿಗಳನ್ನು, ದೇವದಾರುಮರದ ಒಂದು ತುಂಡನ್ನು, ಕೆಂಪುಬಟ್ಟೆಯನ್ನು ಮತ್ತು ಹಿಸ್ಸೋಪ್ ಗಿಡದ ಬರಲನ್ನು ತೆಗೆದುಕೊಂಡು ಬರಬೇಕು. [50]ಯಾಜಕನು ಒಂದು ಪಕ್ಷಿಯನ್ನು ಹರಿಯುವ ನೀರಿನ ಮೇಲೆ ಮಣ್ಣಿನ ಬಟ್ಟಲಲ್ಲಿ ವಧಿಸಬೇಕು. [51]ಬಳಿಕ ಯಾಜಕನು ದೇವದಾರಿನ ಕಟ್ಟಿಗೆಯನ್ನು, ಹಿಸ್ಸೋಪನ್ನು, ಕೆಂಪು ಬಟ್ಟೆಯನ್ನು ಮತ್ತು ಸಜೀವವಾದ ಪಕ್ಷಿಯನ್ನು ತೆಗೆದುಕೊಳ್ಳುವನು. ಯಾಜಕನು ಹರಿಯುವ ನೀರಿನ ಮೇಲೆ ವಧಿಸಲ್ಪಟ್ಟ ಪಕ್ಷಿಯ ರಕ್ತದಲ್ಲಿ ಅವುಗಳನ್ನು ಅದ್ದುವನು. ಬಳಿಕ ಯಾಜಕನು ರಕ್ತವನ್ನು ಆ ಮನೆಯ ಮೇಲೆ ಏಳು ಸಲ ಚಿಮಿಕಿಸುವನು. [52]ಮನೆಯನ್ನು ಶುದ್ಧೀಕರಿಸುವುದಕ್ಕೆ ಯಾಜಕನು ಅವುಗಳನ್ನು ಆ ರೀತಿಯಲ್ಲಿ ಉಪಯೋಗಿಸುವನು. [53]ಯಾಜಕನು ಪಟ್ಟಣದ ಹೊರಗಿರುವ ಬಯಲಿಗೆ ಹೋಗಿ, ಸಜೀವವಾದ ಪಕ್ಷಿಯನ್ನು ಸ್ವತಂತ್ರವಾಗಿ ಬಿಟ್ಟುಬಿಡಬೇಕು. ಹೀಗೆ ಯಾಜಕನು ಆ ಮನೆಗಾಗಿ ಪ್ರಾಯಶ್ಚಿತ್ತ ಮಾಡುವನು. ಆಗ ಆ ಮನೆಯು ಶುದ್ಧವಾಗುವುದು."

[54]"ನಾನಾ ವಿಧವಾದ ಕುಷ್ಠರೋಗದ ಗುರುತುಗಳು ಅಂದರೆ ಕೂದಲು ಬೆಳೆಯುವ ದದ್ದು, [55]ಬಟ್ಟೆಯಲ್ಲಿ ಅಥವಾ ಮನೆಯಲ್ಲಿ ಕಾಣಿಸಿಕೊಳ್ಳುವ ಬೂಷ್ಟಿನ ಕುರಿತು ಅನುಸರಿಸಬೇಕಾದ ನಿಯಮಗಳು ಇವೇ. [56]ಬಾವು, ಗಂಧೆ ಅಥವಾ ಚರ್ಮದ ಮೇಲೆ ಕಂಡುಬರುವ ಹೊಳೆಯುವ ಕಲೆ ಇವುಗಳ ಶುದ್ಧಾಚಾರದ ನಿಯಮಗಳು ಇವೇ. [57]ಅವು ಶುದ್ಧಾಶುದ್ಧ ಬೇಧವನ್ನು ತಿಳಿಸುವ ನಿಯಮಗಳಾಗಿವೆ. ಅವು ಆ ರೀತಿಯ ರೋಗಗಳ* ಶುದ್ಧಾಚಾರದ ನಿಯಮಗಳಾಗಿವೆ."

### ದೇಹದಿಂದುಂಟಾಗುವ ಸ್ರಾವಗಳ ವಿಷಯದಲ್ಲಿ ಅನುಸರಿಸಬೇಕಾದ ನಿಯಮಗಳು

15 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇನೆಂದರೆ: [2]"ಇಸ್ರೇಲರಿಗೆ ಹೀಗೆ ಹೇಳಿರಿ: ಒಬ್ಬನ ದೇಹದಿಂದ ಸ್ರಾವವಾದಾಗ ಆ ವ್ಯಕ್ತಿ ಅಶುದ್ಧನಾಗಿದ್ದಾನೆ. [3]ಆ ಸ್ರಾವವು ಹರಿಯುತ್ತಿದ್ದರೂ ನಿಂತುಹೋಗಿದ್ದರೂ ಅವನು ಅಶುದ್ಧನೇ.

[4]"ಸ್ರಾವವಾಗುತ್ತಿರುವ ವ್ಯಕ್ತಿ ಯಾವ ಹಾಸಿಗೆಯ ಮೇಲೆ ಮಲಗಿದರೂ ಆ ಹಾಸಿಗೆ ಅಶುದ್ಧವಾಗುತ್ತದೆ. ಅವನು ಕುಳಿತುಕೊಳ್ಳುವ ಪ್ರತಿ ಆಸನವೂ ಅಶುದ್ಧವಾಗುತ್ತದೆ. [5]ಯಾವನಾದರೂ ಆ ವ್ಯಕ್ತಿಯ ಹಾಸಿಗೆಯನ್ನು ಮುಟ್ಟಿದರೆ, ಅವನು ತನ್ನ ಬಟ್ಟೆಗಳನ್ನು ತೊಳೆದುಕೊಂಡು ಸ್ನಾನ ಮಾಡಬೇಕು. ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. [6]ಸ್ರಾವವುಳ್ಳವನು ಕುಳಿತುಕೊಳ್ಳುವ ವಸ್ತುವಿನ ಮೇಲೆ ಯಾವನಾದರೂ ಕುಳಿತುಕೊಂಡರೆ, ಅವನು ತನ್ನ ಬಟ್ಟೆಗಳನ್ನು ತೊಳೆದುಕೊಂಡು ಸ್ನಾನಮಾಡಬೇಕು. ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. [7]ಅಲ್ಲದೆ ಸ್ರಾವವುಳ್ಳ ವ್ಯಕ್ತಿಯನ್ನು ಯಾವನಾದರೂ ಮುಟ್ಟಿದರೆ, ಅವನು ತನ್ನ ಬಟ್ಟೆಗಳನ್ನು ತೊಳೆದುಕೊಂಡು ಸ್ನಾನ ಮಾಡಬೇಕು. ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು.

[8]"ಸ್ರಾವವುಳ್ಳ ವ್ಯಕ್ತಿ ಶುದ್ಧವ್ಯಕ್ತಿಯ ಮೇಲೆ ಉಗುಳಿದರೆ, ಶುದ್ಧವ್ಯಕ್ತಿ ತನ್ನ ಬಟ್ಟೆಗಳನ್ನು ತೊಳೆದುಕೊಂಡು ನೀರಿನಿಂದ ಸ್ನಾನಮಾಡಬೇಕು. ಈ ವ್ಯಕ್ತಿ ಸಾಯಂಕಾಲದವರೆಗೆ ಅಶುದ್ಧನಾಗಿರುವನು. [9]ಸ್ರಾವವುಳ್ಳ ವ್ಯಕ್ತಿ ಯಾವ ತಡಿಯ ಮೇಲೆ ಕುಳಿತರೂ ಅದು ಅಶುದ್ಧವಾಗುವುದು. [10]ಆದ್ದರಿಂದ ಯಾವನಾದರೂ ಸ್ರಾವವುಳ್ಳವ್ಯಕ್ತಿಯ ಕೆಳಗಿರುವ ಯಾವದೇ ವಸ್ತುಗಳನ್ನು ಮುಟ್ಟಿದರೂ ಸಾಯಂಕಾಲದವರೆಗೆ ಅಶುದ್ಧನಾಗಿರುವನು. ಸ್ರಾವವುಳ್ಳ ವ್ಯಕ್ತಿಯ ಕೆಳಗಿರುವ ವಸ್ತುಗಳನ್ನು ತೆಗೆದುಕೊಂಡು ಹೋಗುವ ಯಾವನಾದರೂ ತನ್ನ ಬಟ್ಟೆಗಳನ್ನು ತೊಳೆದುಕೊಂಡು

---

**ರೋಗ** ಕುಷ್ಠರೋಗ.

ನೀರಿನಲ್ಲಿ ಸ್ನಾನಮಾಡಬೇಕು. ಅವನು ಸಾಯಂಕಾಲ
ದವರೆಗೆ ಅಶುದ್ಧನಾಗಿರುವನು.
11‘‘ಒಂದು ವೇಳೆ ಸ್ರಾವವುಳ್ಳ ಒಬ್ಬನು ತನ್ನ ಕೈಗಳನ್ನು
ನೀರಿನಲ್ಲಿ ತೊಳೆಯದೆ ಇನ್ನೊಬ್ಬ ವ್ಯಕ್ತಿಯನ್ನು ಮುಟ್ಟಿ
ದರೆ, ಆಗ ಆ ಇನ್ನೊಬ್ಬ ವ್ಯಕ್ತಿ ತನ್ನ ಬಟ್ಟೆಗಳನ್ನು ತೊಳೆದು
ಕೊಂಡು ನೀರಿನಲ್ಲಿ ಸ್ನಾನಮಾಡಬೇಕು. ಅವನು ಸಾಯಂ
ಕಾಲದವರೆಗೆ ಅಶುದ್ಧನಾಗಿರುವನು.
12‘‘ಸ್ರಾವವುಳ್ಳ ವ್ಯಕ್ತಿ ಮಣ್ಣಿನ ಮಡಿಕೆಯನ್ನು ಮುಟ್ಟಿ
ದರೆ, ಆ ಮಡಿಕೆಯನ್ನು ಒಡೆದುಹಾಕಬೇಕು. ಸ್ರಾವವುಳ್ಳ
ವ್ಯಕ್ತಿ ಮರದ ಬಟ್ಟಲನ್ನು ಮುಟ್ಟಿದರೆ, ಆ ವಸ್ತುವನ್ನು
ನೀರಿನಲ್ಲಿ ತೊಳೆಯಬೇಕು.
13‘‘ಸ್ರಾವವುಳ್ಳವನ ಸ್ರಾವವು ನಿಂತು ವಾಸಿಯಾದಾಗ,
ಅವನು ಶುದ್ಧಮಾಡಿಸಿಕೊಳ್ಳುವುದಕ್ಕೆ ಏಳು ದಿನಗಳವರೆಗೆ
ಕಾಯಬೇಕು. ಬಳಿಕ ಅವನು ತನ್ನ ಬಟ್ಟೆಗಳನ್ನು ತೊಳೆದು
ಕೊಂಡು ಹರಿಯುವ ನೀರಿನಲ್ಲಿ ಸ್ನಾನಮಾಡಬೇಕು. ಆಗ
ಅವನು ಶುದ್ಧನಾಗುವನು. 14ಎಂಟನೆಯ ದಿನದಲ್ಲಿ ಆ
ವ್ಯಕ್ತಿ ತನಗೋಸ್ಕರ ಎರಡು ಬೆಳವಕ್ಕಿಗಳನ್ನು ಅಥವಾ
ಎರಡು ಪಾರಿವಾಳದ ಮರಿಗಳನ್ನು ತೆಗೆದುಕೊಳ್ಳಬೇಕು.
ಅವನು ದೇವದರ್ಶನಗುಡಾರದ ಬಾಗಿಲಿನ ಬಳಿ
ಯೆಹೋವನ ಸನ್ನಿಧಿಗೆ ಬರಬೇಕು. ಆ ವ್ಯಕ್ತಿ ಎರಡು ಪಕ್ಷಿ
ಗಳನ್ನು ಯಾಜಕನಿಗೆ ಕೊಡಬೇಕು. 15ಯಾಜಕನು ಈ
ಪಕ್ಷಿಗಳಲ್ಲಿ ಒಂದನ್ನು ಪಾಪಪರಿಹಾರಕ ಯಜ್ಞವಾಗಿಯೂ
ಇನ್ನೊಂದನ್ನು ಸರ್ವಾಂಗಹೋಮವಾಗಿಯೂ ಅರ್ಪಿಸು
ವನು. ಹೀಗೆ ಯಾಜಕನು ಅವನ (ಅಶುದ್ಧವಾದ)
ಸ್ರಾವಕ್ಕಾಗಿ ಯೆಹೋವನ ಸನ್ನಿಧಿಯಲ್ಲಿ ಪ್ರಾಯಶ್ಚಿತ್ತ
ಮಾಡುವನು.

### ಪುರುಷರು ಅನುಸರಿಸಬೇಕಾದ ನಿಯಮಗಳು

16‘‘ಒಬ್ಬನಿಗೆ ವೀರ್ಯಸ್ಖಲನವಾದರೆ, ಅವನು ನೀರಿನಲ್ಲಿ
ಸರ್ವಾಂಗ ಸ್ನಾನಮಾಡಬೇಕು. ಅವನು ಸಾಯಂಕಾಲ
ದವರೆಗೆ ಅಶುದ್ಧನಾಗಿರುವನು. 17ಯಾವ ಬಟ್ಟೆಯ
ಮೇಲಾಗಲೀ ತೊಗಲಿನ ಮೇಲಾಗಲೀ ವೀರ್ಯವು ಬಿದ್ದರೆ,
ಆ ಬಟ್ಟೆ ಅಥವಾ ತೊಗಲನ್ನು ನೀರಿನಿಂದ ತೊಳೆಯ
ಬೇಕು. ಅದು ಸಾಯಂಕಾಲವರೆಗೆ ಅಶುದ್ಧವಾಗಿರು
ವುದು. 18ಪುರುಷನಿಗೆ ಸ್ತ್ರೀಸಂಗದಿಂದ ವೀರ್ಯಸ್ಖಲನವಾದರೆ,
ಆಗ ಅವರಿಬ್ಬರೂ ಸ್ನಾನ ಮಾಡಬೇಕು. ಅವರು ಸಾಯಂ
ಕಾಲದವರೆಗೆ ಅಶುದ್ಧರಾಗಿರುವರು.

### ಸ್ತ್ರೀಯರು ಅನುಸರಿಸಬೇಕಾದ ನಿಯಮಗಳು

19‘‘ಸ್ತ್ರೀಗೆ ಅವಳ ತಿಂಗಳ ಮುಟ್ಟಿನಿಂದ ಸ್ರಾವವಿದ್ದರೆ,
ಅವಳು ಏಳು ದಿನಗಳವರೆಗೆ ಅಶುದ್ಧಳಾಗಿರುವಳು.
ಯಾವನಾದರೂ ಆಕೆಯನ್ನು ಮುಟ್ಟಿದರೆ, ಆ ವ್ಯಕ್ತಿಯೂ
ಸಾಯಂಕಾಲದವರೆಗೆ ಅಶುದ್ಧನಾಗಿರುವನು. 20ಅಲ್ಲದೆ,
ಸ್ತ್ರೀಯು ತನ್ನ ಮುಟ್ಟಿನ ದಿನಗಳಲ್ಲಿ ಯಾವುದರ ಮೇಲೆ
ಮಲಗಿದರೂ ಅದು ಅಶುದ್ಧವಾಗಿರುವುದು ಮತ್ತು ಆ
ಸಮಯದಲ್ಲಿ ಆಕೆಯು ಯಾವುದರ ಮೇಲೆ ಕುಳಿತು
ಕೊಂಡರೂ ಅದು ಅಶುದ್ಧವಾಗಿರುವುದು. 21ಯಾವ
ನಾದರೂ ಅವಳ ಹಾಸಿಗೆಯನ್ನು ಮುಟ್ಟಿದರೆ, ಆ ವ್ಯಕ್ತಿ
ತನ್ನ ಬಟ್ಟೆಗಳನ್ನು ತೊಳೆದುಕೊಂಡು ಸ್ನಾನಮಾಡಬೇಕು.
ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು.
22ಯಾವನಾದರೂ ಅವಳು ಕುಳಿತುಕೊಂಡಿದ್ದ ಯಾವ
ವಸ್ತುವನ್ನಾದರೂ ಮುಟ್ಟಿದರೆ, ಆ ವ್ಯಕ್ತಿ ತನ್ನ ಬಟ್ಟೆಗಳನ್ನು
ತೊಳೆದುಕೊಂಡು ಸ್ನಾನಮಾಡಬೇಕು. ಅವನು ಸಾಯಂ
ಕಾಲದವರೆಗೆ ಅಶುದ್ಧನಾಗಿರುವನು. 23ಅವನು ಅವಳ
ಹಾಸಿಗೆಯನ್ನಾಗಲೀ ಅಥವಾ ಅವಳು ಕುಳಿತಿದ್ದ ಸ್ಥಳದಲ್ಲಿ
ಇದ್ದ ಯಾವದನ್ನಾದರೂ ಮುಟ್ಟಿದರೆ ಅವನು ಸಾಯಂ
ಕಾಲದವರೆಗೆ ಅಶುದ್ಧನಾಗಿರುವನು.
24‘‘ಪುರುಷನು ಸ್ತ್ರೀಯ ಮುಟ್ಟಿನ ಸಮಯದಲ್ಲಿ
ಆಕೆಯೊಡನೆ ಲೈಂಗಿಕ ಸಂಪರ್ಕಹೊಂದಿದರೆ, ಆಗ ಅವನು
ಏಳು ದಿನಗಳವರೆಗೆ ಅಶುದ್ಧನಾಗಿರುವನು. ಅವನು
ಮಲಗಿಕೊಳ್ಳುವ ಪ್ರತಿಯೊಂದು ಹಾಸಿಗೆಯು ಅಶುದ್ಧ
ವಾಗುವುದು.
25‘‘ಸ್ತ್ರೀಗೆ ತನ್ನ ಮುಟ್ಟಿನ ದಿನಗಳ ಹೊರತಾಗಿ ಅನೇಕ
ದಿನಗಳವರೆಗೆ ರಕ್ತಸ್ರಾವವಾದರೆ ಅಥವಾ ಮುಟ್ಟಿನ
ದಿನಗಳ ನಂತರ ಅವಳಿಗೆ ಸ್ರಾವವಾದರೆ, ಆಕೆಯು ತನ್ನ
ಮುಟ್ಟಿನ ದಿನಗಳಲ್ಲಿ ಅಶುದ್ಧಳಾಗಿರುವಂತೆ, ಅಶುದ್ಧಳಾಗಿ
ರುವಳು. ಅವಳಿಗೆ ಸ್ರಾವವಾಗುವ ದಿನಗಳೆಲ್ಲಾ ಅವಳು
ಅಶುದ್ಧಳಾಗಿರುವಳು. 26ಆ ಸ್ರಾವವಿರುವ ತನಕ ಅವಳು
ಯಾವ ಹಾಸಿಗೆಯ ಮೇಲೆ ಮಲಗಿದರೂ, ಅದು ತಿಂಗಳ
ಮುಟ್ಟಿನ ಕಾಲದಲ್ಲಿ ಅವಳು ಮಲಗಿರುವ ಹಾಸಿಗೆ
ಯಂತೆಯೇ ಅಶುದ್ಧವಾಗಿರುವುದು. ಅವಳು ಯಾವುದರ
ಮೇಲೆ ಕುಳಿತರೂ ಅದು ತಿಂಗಳ ಮುಟ್ಟಿನ ಕಾಲದಲ್ಲಿ
ಅವಳು ಕುಳಿತಿದ್ದ ವಸ್ತುವಿನಂತೆಯೇ ಅಶುದ್ಧವಾಗಿರು
ವುದು. 27ಯಾವನಾದರೂ ಆ ವಸ್ತುಗಳನ್ನು ಮುಟ್ಟಿದರೆ,
ಆ ವ್ಯಕ್ತಿ ಅಶುದ್ಧನಾಗಿರುವನು. ಆ ವ್ಯಕ್ತಿಯು ತನ್ನ ಬಟ್ಟೆ
ಗಳನ್ನು ತೊಳೆದುಕೊಂಡು ನೀರಿನಲ್ಲಿ ಸ್ನಾನಮಾಡಬೇಕು.
ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು.
28ಸ್ತ್ರೀಗೆ ಸ್ರಾವವು ನಿಂತ ನಂತರ, ಅವಳು ಏಳು ದಿನಗಳ
ವರೆಗೆ ಕಾಯಬೇಕು. ಅದರ ನಂತರ ಅವಳು ಶುದ್ಧ
ಳಾಗಿರುವಳು. 29ಬಳಿಕ ಎಂಟನೆಯ ದಿನದಲ್ಲಿ ಸ್ತ್ರೀಯು
ಎರಡು ಬೆಳವಕ್ಕಿಗಳನ್ನಾಗಲೀ ಎರಡು ಪಾರಿವಾಳದ ಮರಿ
ಗಳನ್ನಾಗಲೀ ತೆಗೆದುಕೊಳ್ಳಬೇಕು. ಅವಳು ಅವುಗಳನ್ನು
ದೇವದರ್ಶನಗುಡಾರದ ಬಾಗಿಲಲ್ಲಿ ಯಾಜಕನ ಬಳಿಗೆ
ತರಬೇಕು. 30ತರುವಾಯ ಯಾಜಕನು ಒಂದು ಪಕ್ಷಿ
ಯನ್ನು ಪಾಪಪರಿಹಾರಕ ಯಜ್ಞವಾಗಿಯೂ ಇನ್ನೊಂದು

ಪಕ್ಷಿಯನ್ನು ಸರ್ವಾಂಗ ಹೋಮವಾಗಿಯೂ ಅರ್ಪಿಸ
ಬೇಕು. ಹೀಗೆ ಯಾಜಕನು ಅವಳಿಗಾಗಿ ಯೆಹೋವನ
ಸನ್ನಿಧಿಯಲ್ಲಿ ಪ್ರಾಯಶ್ಚಿತ್ತ ಮಾಡುವನು.
31“ಆದ್ದರಿಂದ ಅಶುದ್ಧತ್ವದ ಕುರಿತು ನೀವು ಇಸ್ರೇಲ
ರನ್ನು ಎಚ್ಚರಿಸಬೇಕು. ನೀವು ಜನರನ್ನು ಎಚ್ಚರಿಸದಿದ್ದರೆ
ಅವರು ನನ್ನ ಪವಿತ್ರ ಗುಡಾರವನ್ನು ಅಶುದ್ಧಮಾಡಿ.
ಸಾವಿಗೀಡಾಗುವರು” 32ಸ್ರಾವವುಳ್ಳ ಜನರು ಅನುಸರಿಸ
ಬೇಕಾದ ನಿಯಮಗಳು ಅವುಗಳೇ. ವೀರ್ಯಸ್ಖಲನದಿಂದ
ಅಶುದ್ಧರಾದ ಪುರುಷರು ಅನುಸರಿಸಬೇಕಾದ ನಿಯಮ
ಗಳು ಅವುಗಳೇ. 33ತಮ್ಮ ತಿಂಗಳ ಮುಟ್ಟಿನಿಂದ ಅಶುದ್ಧ
ರಾಗುವ ಸ್ತ್ರೀಯರು, ಸ್ರಾವವಾಗುವ ಗಂಡಸರು ಮತ್ತು
ಸ್ತ್ರೀಯರು ಅನುಸರಿಸಬೇಕಾದ ನಿಯಮಗಳು ಅವುಗಳೇ.
ಅಶುದ್ಧಳಾದ ಸ್ತ್ರೀಯೊಡನೆ ಮಲಗುವುದರಿಂದ ಅಶುದ್ಧ
ನಾಗುವ ಯಾವನಾದರೂ ಅನುಸರಿಸಬೇಕಾದ
ನಿಯಮಗಳು ಅವುಗಳೇ.

## ದೋಷಪರಿಹಾರಕದ ದಿನ

16 ಆರೋನನ ಇಬ್ಬರು ಪುತ್ರರು ಯೆಹೋವನಿಗೆ
ಆತನು ಆಜ್ಞಾಪಿಸದೇ ಇದ್ದ ಧೂಪವನ್ನು ಅರ್ಪಿಸು
ತ್ತಿದ್ದಾಗ ಸತ್ತರು. ಅದಾದ ನಂತರ ಯೆಹೋವನು ಮೋಶೆ
ಯೊಡನೆ ಮಾತಾಡಿದನು. 2ಆತನು ಹೇಳಿದ್ದೇನೆಂದರೆ,
“ನಿನ್ನ ಸಹೋದರನಾದ ಆರೋನನೊಡನೆ ಮಾತಾಡು.
ಅವನು ತನ್ನ ಇಷ್ಟಬಂದಾಗೆಲ್ಲಾ ತೆರೆಯ ಹಿಂದಿರುವ
ಮಹಾಪವಿತ್ರಸ್ಥಳದೊಳಕ್ಕೆ ಹೋಗಬಾರದೆಂದು ಅವನಿಗೆ
ಹೇಳು. ಆ ತೆರೆಯ ಹಿಂದೆ ಇರುವ ಕೋಣೆಯೊಳಗೆ ಪವಿತ್ರ
ಪೆಟ್ಟಿಗೆಯು ಇರುತ್ತದೆ. ಕೃಪಾಸನವು ಪವಿತ್ರಪೆಟ್ಟಿಗೆಯ
ಮೇಲ್ಭಾಗದಲ್ಲಿರುತ್ತದೆ; ಕೃಪಾಸನದ ಮೇಲೆ ಮೇಘದಲ್ಲಿ
ನಾನು ಕಾಣಿಸಿಕೊಳ್ಳುತ್ತೇನೆ. ಆರೋನನು ಆ ಕೋಣೆ
ಯೊಳಗೆ ಹೋದರೆ ಸಾಯುವನು!
3“ದೋಷಪರಿಹಾರಕ ದಿನದಲ್ಲಿ ಆರೋನನು ಮಹಾ
ಪವಿತ್ರ ಸ್ಥಳದೊಳಗೆ ಪ್ರವೇಶಿಸುವ ಮೊದಲು ಪಾಪಪರಿ
ಹಾರಕ ಯಜ್ಞವಾಗಿ ಹೋರಿಯನ್ನೂ ಸರ್ವಾಂಗ
ಹೋಮವಾಗಿ ಟಗರನ್ನೂ ಅರ್ಪಿಸಬೇಕು. 4ಆರೋನನು
ತನ್ನ ಪೂರ್ಣ ಶರೀರವನ್ನು ನೀರಿನಿಂದ ತೊಳೆದು ಕೊಳ್ಳ
ಬೇಕು. ಬಳಿಕ ಅವನು ಈ ಬಟ್ಟೆಗಳನ್ನು ಹಾಕಿಕೊಳ್ಳ
ಬೇಕು. ಆರೋನನು ಪವಿತ್ರ ನಾರಿನ ನಿಲುವಂಗಿಯನ್ನೂ
ನಾರಿನ ಚಡ್ಡಿಯನ್ನೂ ಧರಿಸಿಕೊಂಡಿರಬೇಕು. ಅವನು
ನಾರಿನ ನಡುಕಟ್ಟನ್ನು ಕಟ್ಟಿಕೊಳ್ಳಬೇಕು; ನಾರಿನ
ಮುಂಡಾಸವನ್ನು ಇಟ್ಟುಕೊಳ್ಳಬೇಕು. ಇವುಗಳು ಪವಿತ್ರ
ವಾದವುಗಳಾಗಿವೆ.
5“ಆರೋನನು ಇಸ್ರೇಲರಿಂದ ಪಾಪಪರಿಹಾರಕ
ಯಜ್ಞಕ್ಕಾಗಿ ಎರಡು ಹೋತಗಳನ್ನು ಮತ್ತು ಸರ್ವಾಂಗ
ಹೋಮಕ್ಕಾಗಿ ಒಂದು ಟಗರನ್ನು ತೆಗೆದುಕೊಳ್ಳಬೇಕು.
6ಬಳಿಕ ಆರೋನನು ಪಾಪಪರಿಹಾರಕ ಯಜ್ಞಕ್ಕೋಸ್ಕರ
ಹೋರಿಯನ್ನು ಅರ್ಪಿಸಬೇಕು. ಈ ಪಾಪ ಪರಿಹಾರಕ
ಯಜ್ಞವು ಅವನಿಗಾಗಿ ಇರುತ್ತದೆ. ಆರೋನನು ತನಗೂ
ತನ್ನ ಕುಟುಂಬದವರಿಗೂ ಪ್ರಾಯಶ್ಚಿತ್ತ ಮಾಡಲು
ಇದನ್ನು ಮಾಡಬೇಕು.
7“ತರುವಾಯ ಆರೋನನು ಆ ಎರಡು ಹೋತ
ಗಳನ್ನು ತೆಗೆದುಕೊಂಡು ಅವುಗಳನ್ನು ದೇವದರ್ಶನ
ಗುಡಾರದ ಬಾಗಿಲಿನಲ್ಲಿ ಯೆಹೋವನ ಸನ್ನಿಧಿಗೆ ತರ
ಬೇಕು. 8ಆರೋನನು ಚೀಟುಹಾಕಿ ಒಂದು ಹೋತವನ್ನು
ಯೆಹೋವನಿಗಾಗಿಯೂ ಇನ್ನೊಂದನ್ನು ಅಜಾಜೇಲನಿ
ಗಾಗಿಯೂ * ಎಂದು ನಿರ್ಧರಿಸಬೇಕು.
9“ಬಳಿಕ ಆರೋನನು ಚೀಟು ಹಾಕುವುದರ ಮೂಲಕ
ಯೆಹೋವನಿಗೋಸ್ಕರ ಆರಿಸಲ್ಪಟ್ಟ ಹೋತವನ್ನು
ಅರ್ಪಿಸುವನು. ಆರೋನನು ಈ ಹೋತವನ್ನು ಪಾಪ
ಪರಿಹಾರಕ ಯಜ್ಞವಾಗಿ ಅರ್ಪಿಸಬೇಕು. 10ಆದರೆ ಚೀಟು
ಹಾಕುವುದರ ಮೂಲಕ ಅಜಾಜೇಲನಿಗಾಗಿ ಆರಿಸಲ್ಪಟ್ಟ
ಹೋತವನ್ನು ಜೀವಂತವಾಗಿ ಯೆಹೋವನ ಸನ್ನಿಧಿಗೆ
ತರಬೇಕು ಮತ್ತು ಈ ಹೋತವನ್ನು ಮರುಭೂಮಿ
ಯಲ್ಲಿರುವ ಅಜಾಜೇಲನಿಗೆ ಕಳಹಿಸಬೇಕು. ಜನರಿ
ಗೋಸ್ಕರ ಪ್ರಾಯಶ್ಚಿತ್ತ ಮಾಡಲು ಹೀಗೆ ಮಾಡಬೇಕು.
11“ಬಳಿಕ ಆರೋನನು ಹೋರಿಯನ್ನು ತನ್ನ ಪಾಪ
ಪರಿಹಾರಕ ಯಜ್ಞವಾಗಿ ಅರ್ಪಿಸುವನು. ಆರೋನನು ತನ
ಗಾಗಿಯೂ ತನ್ನ ಕುಟುಂಬದವರಿಗಾಗಿಯೂ ಪ್ರಾಯ
ಶ್ಚಿತ್ತ ಮಾಡುವನು. ಆರೋನನು ಹೋರಿಯನ್ನು ತನ್ನ
ಪಾಪಪರಿಹಾರಕ ಯಜ್ಞವಾಗಿ ವಧಿಸುವನು. 12ಬಳಿಕ
ಅವನು ಯೆಹೋವನ ಸನ್ನಿಧಿಯಲ್ಲಿರುವ ವೇದಿಕೆಯಿಂದ
ಕೆಂಡಗಳನ್ನು ಧೂಪಾರತಿಯಲ್ಲಿ ತೆಗೆದುಕೊಳ್ಳಬೇಕು.
ಆರೋನನು ಪರಿಮಳಧೂಪ ದ್ರವ್ಯದ ಪುಡಿಯಲ್ಲಿ
ಎರಡು ಹಿಡಿ ತೆಗೆದುಕೊಳ್ಳುವನು. ಆರೋನನು ಆ ಧೂಪ
ವನ್ನು ತೆರೆಯ ಹಿಂದೆ ಇರುವ ಕೋಣೆಗೆ ತೆಗೆದುಕೊಂಡು
ಬರಬೇಕು. 13ಆರೋನನು ಯೆಹೋವನ ಸನ್ನಿಧಿಯಲ್ಲಿ
ಬೆಂಕಿಯ ಮೇಲೆ ಧೂಪವನ್ನು ಹಾಕಬೇಕು. ಆಗ ಒಡಂ
ಬಡಿಕೆಯ ಪೆಟ್ಟಿಗೆ ಮೇಲಿರುವ ಕೃಪಾಸನವನ್ನು ಧೂಪದ
ಹೊಗೆಯು ಮುಚ್ಚಿಕೊಳ್ಳುವುದು. ಹೀಗೆ ಮಾಡುವುದ
ರಿಂದ ಆರೋನನು ಸಾಯುವುದಿಲ್ಲ. 14ಅಲ್ಲದೆ
ಆರೋನನು ಹೋರಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದು
ಕೊಂಡು ಕೃಪಾಸನದ ಪೂರ್ವಭಾಗದಲ್ಲಿ ತನ್ನ

**ಅಜಾಜೇಲ** ಅಥವಾ “ಪ್ರಾಯಶ್ಚಿತ್ತ ಪಶು.” ಈ ಪದದ ಸ್ಪಷ್ಟ ಅರ್ಥ ತಿಳಿದಿಲ್ಲ. ಈ ಹೋತವು ಜನರ ಪಾಪಗಳನ್ನು “ಹೊತ್ತುಕೊಂಡು ಹೋಗಿದೆ” ಎಂಬ ಪ್ರಾಮುಖ್ಯ ಆಲೋಚನೆಯನ್ನು ಕೊಡಬಹುದಾಗಿದೆ.

ಬೆರಳಿನಿಂದ ಚಿಮಿಕಿಸಬೇಕು. ಕೃಪಾಸನದ ಮುಂಭಾಗದಲ್ಲಿ ಅವನು ತನ್ನ ಬೆರಳಿನಿಂದ ರಕ್ತವನ್ನು ಏಳು ಬಾರಿ ಚಿಮಿಕಿಸುವನು.

15“ಬಳಿಕ ಆರೋನನು ಜನರಿಗೋಸ್ಕರವಾಗಿರುವ
ಪಾಪಪರಿಹಾರಕ ಪಶುವಾದ ಹೋತವನ್ನು ವಧಿಸಬೇಕು.
ಆರೋನನು ಈ ಹೋತದ ರಕ್ತವನ್ನು ತೆರೆಯ ಹಿಂಭಾಗ
ದಲ್ಲಿರುವ ಕೋಣೆಗೆ ತೆಗೆದುಕೊಂಡು ಬರಬೇಕು.
ಆರೋನನು ಹೋರಿಯ ರಕ್ತದಿಂದ ಮಾಡಿದಂತೆ
ಹೋತದ ರಕ್ತದಿಂದಲೂ ಮಾಡಬೇಕು. ಆರೋನನು
ಹೋತದ ರಕ್ತವನ್ನು ಕೃಪಾಸನದ ಮೇಲೂ ಮತ್ತು ಕೃಪಾ
ಸನದ ಮುಂಭಾಗದಲ್ಲಿಯೂ ಚಿಮಿಕಿಸಬೇಕು.
16ಆರೋನನು ಮಹಾಪವಿತ್ರಸ್ಥಳವನ್ನು ಪರಿಶುದ್ಧ
ಮಾಡಲು ಅನುಸರಿಸಬೇಕಾದ ನಿಯಮಗಳು: ಇಸ್ರೇಲರ
ಅಶುದ್ಧತ್ವ, ದಂಗೆಕೋರತನ ಮತ್ತು ಅವರ ಯಾವುದೇ
ಪಾಪಗಳ ಪರಿಹಾರಕ್ಕಾಗಿ ಆರೋನನು ಇದನ್ನು ಮಾಡ
ಬೇಕು. ಅವರ ಅಶುದ್ಧತ್ವದ ನಡುವೆ ಇರುವ ದೇವದರ್ಶನ
ಗುಡಾರಕ್ಕೂ ಅವನು ಇದನ್ನೇ ಮಾಡಬೇಕು.
17ಆರೋನನು ಮಹಾಪವಿತ್ರಸ್ಥಳದಲ್ಲಿ ಪ್ರಾಯಶ್ಚಿತ್ತ
ಮಾಡಲು ದೇವದರ್ಶನಗುಡಾರದೊಳಗೆ ಹೋದ
ಸಮಯದಿಂದ ಅವನು ಬರುವ ತನಕ ಗುಡಾರದೊಳಗೆ
ಯಾರೂ ಇರಕೂಡದು. ಆರೋನನು ಬರುವ ತನಕ
ಯಾರೂ ಒಳಗೆ ಹೋಗಕೂಡದು. ಹೀಗೆ ಆರೋನನು
ತನಗಾಗಿಯೂ ತನ್ನ ಕುಟುಂಬಕ್ಕಾಗಿಯೂ ಮತ್ತು ಇಡೀ
ಇಸ್ರೇಲ್ ಸಮೂಹಕ್ಕಾಗಿಯೂ ಪ್ರಾಯಶ್ಚಿತ್ತ ಮಾಡು
ವನು. 18ತರುವಾಯ ಆರೋನನು ಹೊರಗೆ ಬಂದು
ಯೆಹೋವನ ಸನ್ನಿಧಿಯಲ್ಲಿರುವ ಯಜ್ಞವೇದಿಕೆಯ
ಬಳಿಗೆ ಹೋಗುವನು. ಆರೋನನು ಯಜ್ಞವೇದಿಕೆ
ಯನ್ನು ಶುದ್ಧೀಕರಿಸುವನು. ಆರೋನನು ಹೋರಿಯ
ರಕ್ತದಲ್ಲಿ ಸ್ವಲ್ಪವನ್ನು ಮತ್ತು ಹೋತದ ರಕ್ತದಲ್ಲಿ ಸ್ವಲ್ಪವನ್ನು
ತೆಗೆದುಕೊಂಡು ಯಜ್ಞವೇದಿಕೆಯ ಎಲ್ಲಾ ಮೂಲೆಗಳಿಗೆ
ಹಚ್ಚುವನು. 19ಬಳಿಕ ಆರೋನನು ತನ್ನ ಬೆರಳಿನಿಂದ ಸ್ವಲ್ಪ
ರಕ್ತವನ್ನು ಯಜ್ಞವೇದಿಕೆಯ ಮೇಲೆ ಏಳು ಸಲ ಚಿಮಿಕಿಸು
ವನು. ಹೀಗೆ ಆರೋನನು ಯಜ್ಞವೇದಿಕೆಯನ್ನು ಇಸ್ರೇಲ
ರಿಂದ ಅದಕ್ಕುಂಟಾದ ಅಶುದ್ಧತ್ವದಿಂದ ದೂರಮಾಡಿ
ಪರಿಶುದ್ಧಗೊಳಿಸುವನು.

20“ಹೀಗೆ ಆರೋನನು ಮಹಾಪವಿತ್ರಸ್ಥಳವನ್ನೂ ದೇವ
ದರ್ಶನಗುಡಾರವನ್ನೂ ಯಜ್ಞವೇದಿಕೆಯನ್ನೂ ಶುದ್ಧೀಕ
ರಿಸುವನು. ಬಳಿಕ ಆರೋನನು ಜೀವಂತವಾಗಿರುವ
ಹೋತವನ್ನು ಯೆಹೋವನ ಬಳಿಗೆ ತರುವನು.
21ಆರೋನನು ಸಜೀವವಾದ ಹೋತದ ತಲೆಯ ಮೇಲೆ
ತನ್ನ ಎರಡು ಕೈಗಳನ್ನಿಟ್ಟು ಇಸ್ರೇಲರು ಮಾಡಿದ ಪಾಪಗ
ಳನ್ನು ಮತ್ತು ದ್ರೋಹಗಳನ್ನು ಅರಿಕೆಮಾಡುವನು. ಹೀಗೆ
ಆರೋನನು ಜನರ ಪಾಪಗಳನ್ನು ಹೋತದ ತಲೆಯ
ಮೇಲೆ ಹೊರಿಸುವನು. ಬಳಿಕ ಅವನು ಹೋತವನ್ನು
ಮರುಭೂಮಿಗೆ ಕಳುಹಿಸಿಬಿಡುವನು. ಒಬ್ಬ ಮನುಷ್ಯನು
ಹೋತವನ್ನು ನಡಿಸಿಕೊಂಡು ಹೋಗಲು ಸಿದ್ಧನಾಗಿ
ನಿಂತಿರುವನು. 22ಹೀಗೆ ಹೋತವು ಜನರ ಪಾಪಗಳನ್ನು
ಹೊತ್ತುಕೊಂಡು ಬರಿದಾದ ಮರುಭೂಮಿಗೆ ಹೋಗು
ವುದು. ಹೋತವನ್ನು ನಡಿಸಿಕೊಂಡು ಹೋಗುವ
ಮನುಷ್ಯನು ಮರುಭೂಮಿಯಲ್ಲಿ ಅದನ್ನು ಬಿಟ್ಟು
ಬಿಡುವನು.

23“ಬಳಿಕ ಆರೋನನು ದೇವದರ್ಶನಗುಡಾರವನ್ನು
ಪ್ರವೇಶಿಸುವನು. ಅವನು ಪವಿತ್ರಸ್ಥಳದೊಳಗೆ ಹೋಗಿ
ದ್ದಾಗ ಧರಿಸಿಕೊಂಡಿದ್ದ ನಾರುಬಟ್ಟೆಯನ್ನು ತೆಗೆದು
ಹಾಕುವನು. ಅವನು ಈ ಬಟ್ಟೆಗಳನ್ನು ಅಲ್ಲಿಯೇ ಬಿಡ
ಬೇಕು. 24ಅವನು ತನ್ನ ಶರೀರವನ್ನು ಪವಿತ್ರ ಸ್ಥಳದಲ್ಲಿ
ನೀರಿನಿಂದ ತೊಳೆದುಕೊಳ್ಳುವನು. ಬಳಿಕ ಅವನು ತನ್ನ
ಇತರ ವಿಶೇಷ ಬಟ್ಟೆಗಳನ್ನು ಧರಿಸಿಕೊಳ್ಳುವನು. ಅವನು
ಹೊರಗೆ ಬಂದು, ತನ್ನ ಸರ್ವಾಂಗಹೋಮವನ್ನು ಮತ್ತು
ಜನರ ಸರ್ವಾಂಗಹೋಮವನ್ನು ಅರ್ಪಿಸುವನು. ಅವನು
ತನಗಾಗಿಯೂ ಜನರಿಗಾಗಿಯೂ ಪ್ರಾಯಶ್ಚಿತ್ತ ಮಾಡು
ವನು. 25ಬಳಿಕ ಅವನು ಪಾಪಪರಿಹಾರಕ ಯಜ್ಞದ
ಕೊಬ್ಬನ್ನು ವೇದಿಕೆಯ ಮೇಲೆ ಹೋಮಮಾಡುವನು.

26“ಅಜಾಜೇಲನಿಗೆ ಹೋತವನ್ನು ನಡೆಸಿಕೊಂಡು
ಹೋದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ನೀರಿ
ನಿಂದ ತನ್ನ ಪೂರ್ಣಶರೀರವನ್ನು ತೊಳೆದುಕೊಳ್ಳಬೇಕು.
ಬಳಿಕ ಅವನು ಪಾಳೆಯದೊಳಗೆ ಬರಬಹುದು.

27“ಪಾಪಪರಿಹಾರಕ ಯಜ್ಞಕ್ಕಾಗಿ ಇರುವ ಹೋರಿ
ಯನ್ನು ಮತ್ತು ಹೋತವನ್ನು ಪಾಳೆಯದ ಹೊರಗೆ ತೆಗೆದು
ಕೊಂಡು ಹೋಗಬೇಕು. (ಆ ಪಶುಗಳ ರಕ್ತವನ್ನು ಪವಿತ್ರ
ವಸ್ತುಗಳನ್ನು ಶುದ್ಧೀಕರಿಸುವುದಕ್ಕೆ ಪವಿತ್ರಸ್ಥಳಕ್ಕೆ ತರ
ಲಾಗಿತ್ತು.) ಯಾಜಕರು ಆ ಪಶುಗಳ ಚರ್ಮ, ಮಾಂಸ
ಮತ್ತು ದೇಹದ ಕಲ್ಮಶವನ್ನೆಲ್ಲಾ ಬೆಂಕಿಯಿಂದ ಸುಟ್ಟು
ಹಾಕಿಸಬೇಕು. 28ಬಳಿಕ ಅವುಗಳನ್ನು ಸುಡುವ ವ್ಯಕ್ತಿ ತನ್ನ
ಬಟ್ಟೆಗಳನ್ನು ತೊಳೆದುಕೊಂಡು ತನ್ನ ಪೂರ್ಣದೇಹವನ್ನು
ನೀರಿನಿಂದ ತೊಳೆದುಕೊಳ್ಳಬೇಕು. ಬಳಿಕ ಅವನು
ಪಾಳೆಯದೊಳಗೆ ಬರಬಹುದು.

29“ಇದು ನಿಮಗೆ ಶಾಶ್ವತವಾದ ಕಟ್ಟಳೆ: ಏಳನೆಯ
ತಿಂಗಳಿನ ಹತ್ತನೆಯ ದಿನದಲ್ಲಿ ನೀವು ಆಹಾರವನ್ನು*
ತೆಗೆದುಕೊಳ್ಳದೆ ಉಪವಾಸ ಮಾಡಬೇಕು. ಆ ದಿನದಲ್ಲಿ
ಯಾವ ಕೆಲಸವನ್ನೂ ಮಾಡಬಾರದು. ನಿಮ್ಮ ದೇಶದಲ್ಲಿ
ವಾಸಿಸುವ ಪ್ರವಾಸಿಗರಾಗಲೀ ಪರದೇಶಸ್ಥರಾಗಲೀ
ಯಾವ ಕೆಲಸವನ್ನು ಮಾಡಬಾರದು. 30ಯಾಕಂದರೆ ಈ

---

**ಆಹಾರವನ್ನು** ಅಕ್ಷರಶಃ ನಿಮ್ಮನ್ನು ದೀನರನ್ನಾಗಿ ಮಾಡಿಕೊಳ್ಳಿರಿ.

ದಿನದಲ್ಲಿ ಯಾಜಕನು ನಿಮ್ಮನ್ನು ಶುದ್ಧೀಕರಿಸಲು ನಿಮ
ಗಾಗಿ ಪ್ರಾಯಶ್ಚಿತ್ತ ಮಾಡುವನು. ಆಗ ನೀವು ಯೆಹೋವ
ನಿಗಾಗಿ ನಿಮ್ಮ ಎಲ್ಲಾ ಪಾಪಗಳಿಂದ ಬಿಡುಗಡೆಯಾಗಿ
ಪರಿಶುದ್ಧರಾಗುವಿರಿ. 31ಈ ದಿನವು ನಿಮಗೆ ಬಹಳ
ಪ್ರಾಮುಖ್ಯವಾದ ವಿಶ್ರಾಂತಿ ದಿನವಾಗಿದೆ. ನೀವು ಉಪ
ವಾಸ ಮಾಡಬೇಕು. ಈ ನಿಯಮ ಶಾಶ್ವತವಾದದ್ದು.
32“ಆದ್ದರಿಂದ ಪ್ರಧಾನಯಾಜಕನಾಗಿ ಆರಿಸಲ್ಪಟ್ಟ
ವನು ವಸ್ತುಗಳನ್ನು ಶುದ್ಧೀಕರಿಸಲು ಈ ಆಚರಣೆಯನ್ನು
ಮಾಡಬೇಕು. ಈತನು ತನ್ನ ತಂದೆಯ ನಂತರ ಪ್ರಧಾನ
ಯಾಜಕನಾಗಿ ಸೇವೆಮಾಡುವುದಕ್ಕೆ ನೇಮಿಸಲ್ಪಟ್ಟವನಾಗಿ
ದ್ದಾನೆ. ಆ ಯಾಜಕನು ಪವಿತ್ರವೂ ಶ್ರೇಷ್ಠವೂ ಆಗಿರುವ
ನಾರುಬಟ್ಟೆಯನ್ನು ಧರಿಸಿಕೊಳ್ಳಬೇಕು. 33ಅವನು ಮಹಾ
ಪವಿತ್ರಸ್ಥಳ, ದೇವದರ್ಶನಗುಡಾರ ಮತ್ತು ವೇದಿಕೆಯನ್ನು
ಶುದ್ಧೀಕರಿಸಬೇಕು; ಅವನು ಯಾಜಕರನ್ನು ಇಸ್ರೇಲ
ರನ್ನು ಶುದ್ಧೀಕರಿಸಬೇಕು. 34ಇಸ್ರೇಲರನ್ನು ಶುದ್ಧೀಕರಿ
ಸುವ ಕಟ್ಟಳೆ ಶಾಶ್ವತವಾದದ್ದು. ನೀವು ಆ ಕಾರ್ಯಗಳನ್ನು
ವರ್ಷಕ್ಕೊಮ್ಮೆ ಇಸ್ರೇಲರ ಪಾಪಗಳ ದೆಸೆಯಿಂದ ಮಾಡ
ಬೇಕು.” ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆ
ಅವರು ಆ ಕಾರ್ಯಗಳನ್ನು ಮಾಡಿದರು.

### ಪ್ರಾಣಿಗಳನ್ನು ಕೊಲ್ಲುವುದರ ಮತ್ತು ತಿನ್ನುವುದರ ಕುರಿತು ನಿಯಮಗಳು

17 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2ಆರೋನನೊಡನೆಯೂ ಅವನ ಪುತ್ರರೊಡ
ನೆಯೂ ಇಸ್ರೇಲರೆಲ್ಲರೊಡನೆಯೂ ಮಾತಾಡು.
ಯೆಹೋವನು ಹೀಗೆ ಆಜ್ಞಾಪಿಸಿದ್ದಾನೆಂದು ಹೇಳು.
ಅದೇನಂದರೆ, 3ಒಬ್ಬ ಇಸ್ರೇಲರಲ್ಲಿ ಯಾವನಾದರೂ
ಹೋರಿಯನ್ನಾಗಲೀ ಕುರಿಮರಿಯನ್ನಾಗಲೀ ಹೋತವ
ನ್ನಾಗಲೀ ಪಾಳೆಯದೊಳಗೆ ಅಥವಾ ಪಾಳೆಯದ ಹೊರಗೆ
ವಧಿಸಬಹುದು. 4ಅವನು ಆ ಪ್ರಾಣಿಯನ್ನು ದೇವದರ್ಶನ
ಗುಡಾರದ ಬಾಗಿಲಿಗೆ ತರಬೇಕು. ಅವನು ಆ ಪಶುವಿನ
ಒಂದು ಭಾಗವನ್ನು ಯೆಹೋವನಿಗೆ ಕಾಣಿಕೆಯಾಗಿ ಕೊಡ
ಬೇಕು. ಅವನು ರಕ್ತವನ್ನು ಸುರಿಸಿದ್ದರಿಂದ ತನ್ನ ಕಾಣಿಕೆ
ಯನ್ನು ಯೆಹೋವನ ಪವಿತ್ರಗುಡಾರದೊಳಗೆ ತೆಗೆದು
ಕೊಂಡು ಹೋಗಬೇಕು. ಅವನು ಪ್ರಾಣಿಯ ಒಂದು
ಭಾಗವನ್ನು ಯೆಹೋವನಿಗೆ ಉಡುಗೊರೆಯಾಗಿ ತೆಗೆದು
ಕೊಂಡು ಹೋಗದಿದ್ದರೆ, ಅವನನ್ನು ಅವನ ಜನರಿಂದ
ಬಹಿಷ್ಕರಿಸಬೇಕು. 5ಸಮಾಧಾನ ಯಜ್ಞ ರೂಪವಾಗಿ
ಇದನ್ನು ಯೆಹೋವನಿಗೆ ಅರ್ಪಿಸುವ ಯಜ್ಞಕ್ಕೆ ಇದೇ
ನಿಯಮ. ಇಸ್ರೇಲರು ಹೊಲಗಳಲ್ಲಿ ಕೊಲ್ಲುವ ತಮ್ಮ
ಪ್ರಾಣಿಗಳನ್ನು ದೇವದರ್ಶನಗುಡಾರದ ಬಾಗಿಲಿಗೆ
ಅಂದರೆ ಯೆಹೋವನ ಸನ್ನಿಧಿಯಲ್ಲಿರುವ ಯಾಜಕರ
ಬಳಿಗೆ ತರಬೇಕು. 6ಬಳಿಕ ಯಾಜಕನು ಆ ಪಶುಗಳ
ರಕ್ತವನ್ನು ದೇವದರ್ಶನಗುಡಾರದ ಬಾಗಿಲಿನ ಹತ್ತಿರ
ವಿರುವ ಯೆಹೋವನ ಯಜ್ಞವೇದಿಕೆಗೆ ಚೆಲ್ಲುವನು ಮತ್ತು
ಅವುಗಳ ಕೊಬ್ಬನ್ನು ಯಜ್ಞವೇದಿಕೆಯ ಮೇಲೆ ಹೋಮ
ಮಾಡುವನು. ಅದರ ಸುವಾಸನೆಯು ಯೆಹೋವನಿಗೆ
ಪ್ರಿಯವಾಗಿದೆ. 7ಅವರು ‘ಅಜ ದೇವತೆಗಳಿಗೆ’ ಇನ್ನು
ಮುಂದೆ ಬಲಿಕೊಡಬಾರದು. ಅವರು ಅನ್ಯದೇವತೆಗಳ
ಹಿಂದೆ ಹೋಗಿದ್ದಾರೆ. ಆ ರೀತಿಯಲ್ಲಿ ಅವರು ಸೂಳೆಯರ
ಹಾಗೆ ವರ್ತಿಸಿದ್ದಾರೆ. ಈ ನಿಯಮಗಳು ಶಾಶ್ವತವಾಗಿವೆ.
8“ಜನರಿಗೆ ಹೇಳಬೇಕಾದದ್ದೇನೆಂದರೆ ನಿಮ್ಮ ಮಧ್ಯ
ದಲ್ಲಿ ವಾಸಿಸುತ್ತಿರುವ ಯಾವ ಇಸ್ರೇಲನಾಗಲೀ ಅನ್ಯನಾ
ಗಲೀ (ಪ್ರವಾಸಿಗನು ಅಥವಾ ವಿದೇಶಿಯನು) ಸರ್ವಾಂಗ
ಹೋಮವನ್ನಾಗಲೀ ಯಜ್ಞವನ್ನಾಗಲೀ ಅರ್ಪಿಸ
ಬಹುದು. 9ಅವನು ತನ್ನ ಬಲಿಯನ್ನು ದೇವದರ್ಶನ
ಗುಡಾರದ ಬಾಗಿಲಿಗೆ ತೆಗೆದುಕೊಂಡು ಬಂದು
ಯೆಹೋವನಿಗೆ ಅರ್ಪಿಸಬೇಕು. ಇಲ್ಲವಾದರೆ ಅವನನ್ನು
ಅವನ ಕುಲದಿಂದ ತೆಗೆದುಹಾಕಬೇಕು.
10“ರಕ್ತವನ್ನು ತಿನ್ನುವ ಪ್ರತಿಯೊಬ್ಬನಿಗೂ ನಾನು
(ದೇವರು) ವಿರುದ್ಧವಾಗಿರುವೆನು. ಅವನು ನಿಮ್ಮ ಮಧ್ಯ
ದಲ್ಲಿ ವಾಸವಾಗಿರುವ ಇಸ್ರೇಲನಾಗಲೀ ಪರದೇಶಸ್ಥ
ನಾಗಲೀ ಅಗಿರಬಹುದು. ನಾನು ಆ ವ್ಯಕ್ತಿಯನ್ನು ಅವನ
ಜನರಿಂದ ತೆಗೆದುಹಾಕುವೆನು. 11ಯಾಕಂದರೆ ದೇಹದ
ಜೀವ ರಕ್ತದಲ್ಲಿದೆ. ನೀವು ನಿಮಗೋಸ್ಕರವಾಗಿ ಯಜ್ಞ
ವೇದಿಕೆಯ ಮೇಲೆ ಪ್ರಾಯಶ್ಚಿತ್ತ ಮಾಡಲಿ ಎಂದು ನಾನು
ಅದನ್ನು ನಿಮಗೆ ಕೊಟ್ಟಿದ್ದೇನೆ. ನೀವು ನಿಮಗೋಸ್ಕರವಾಗಿ
ಪ್ರಾಯಶ್ಚಿತ್ತ ಮಾಡಲು ಈ ನಿಯಮಗಳನ್ನು ಉಪ
ಯೋಗಿಸಬೇಕು. ಒಬ್ಬನ ಜೀವಕ್ಕೆ ರಕ್ತವೇ ಪ್ರಾಯಶ್ಚಿತ್ತ
ವಾಗಿದೆ. ಜೀವಿಯೊಂದನ್ನು ಕೊಂದಿದ್ದರ ಬೆಲೆಯಾಗಿ
ನೀವು ನನಗೆ ಆ ರಕ್ತವನ್ನು ಕೊಡಬೇಕು. 12ಆದ್ದರಿಂದ
ನಾನು ಇಸ್ರೇಲರಿಗೆ ಹೇಳುವುದೇನೆಂದರೆ ನಿಮ್ಮಲ್ಲಿ
ಯಾವನೂ ರಕ್ತಭೋಜನ ಮಾಡಬಾರದು ಮತ್ತು ನಿಮ್ಮ
ಮಧ್ಯದಲ್ಲಿ ವಾಸಿಸುವ ಯಾವ ಪರದೇಶಸ್ಥನೂ
ರಕ್ತಭೋಜನ ಮಾಡಬಾರದು.
13“ಯಾವನಾದರೂ ಒಂದು ಪ್ರಾಣಿಯನ್ನು ಬೇಟೆ
ಯಾಡಿದರೆ, ಅಥವಾ ಪಕ್ಷಿಯನ್ನು ಹಿಡಿದರೆ, ಅವನು ರಕ್ತ
ವನ್ನು ನೆಲದ ಮೇಲೆ ಸುರಿದು ಅದನ್ನು ಮಣ್ಣಿನಿಂದ ಮುಚ್ಚಿ
ಬಿಡಬೇಕು. ಅವನು ಇಸ್ರೇಲನಾದರೂ ನಿಮ್ಮ ಮಧ್ಯದಲ್ಲಿ
ವಾಸಿಸುವ ಪರದೇಶಸ್ಥನಾದರೂ ಹಾಗೆಯೇ ಮಾಡ
ಬೇಕು. 14ನೀವು ಇದನ್ನು ಯಾಕೆ ಮಾಡಬೇಕೆಂದರೆ,
ಮಾಂಸದಲ್ಲಿ ರಕ್ತವು ಇನ್ನೂ ಇದ್ದರೆ, ಅದರ ಪ್ರಾಣವು
ಇನ್ನೂ ಮಾಂಸದಲ್ಲಿ ಇದೆ. ಆದ್ದರಿಂದ ನಾನು ಇಸ್ರೇಲರಿಗೆ
ಈ ಅಪ್ಪಣೆಯನ್ನು ಕೊಡುತ್ತೇನೆ. ರಕ್ತದಿಂದ ಕೂಡಿರುವ
ಮಾಂಸವನ್ನು ತಿನ್ನಬಾರದು. ಯಾವನಾದರೂ ರಕ್ತ

ಭೋಜನ ಮಾಡಿದರೆ, ಅವನು ತನ್ನ ಜನರಿಂದ ತೆಗೆದು ಹಾಕಲ್ಪಡಬೇಕು.

15‘‘ಅಲ್ಲದೆ ಯಾವನಾದರೂ ತನ್ನಷ್ಟಕ್ಕೆ ಸತ್ತಪ್ರಾಣಿಯನ್ನು ತಿಂದರೆ ಅಥವಾ ಯಾವನಾದರೂ ಬೇರೆ ಪ್ರಾಣಿಯಿಂದ ಕೊಲ್ಲಲ್ಪಟ್ಟ ಪ್ರಾಣಿಯನ್ನು ತಿಂದರೆ, ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು. ಅವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ನೀರಿನಲ್ಲಿ ಸ್ನಾನಮಾಡಿಕೊಳ್ಳಬೇಕು. ಅವನು ಇಸ್ರೇಲನಾಗಿದ್ದರೂ ನಿಮ್ಮ ಮಧ್ಯದಲ್ಲಿ ವಾಸಿಸುವ ಪರದೇಶಸ್ಥನಾಗಿದ್ದರೂ ಹಾಗೆಯೇ ಮಾಡಬೇಕು. 16ಅವನು ತನ್ನ ಬಟ್ಟೆಗಳನ್ನು ತೊಳೆದುಕೊಳ್ಳದೆಯೂ ಸ್ನಾನಮಾಡಿಕೊಳ್ಳದೆಯೂ ಹೋದರೆ ಆಗ ಅವನು ಪಾಪಮಾಡಿದ ದೋಷಿಯಾಗಿರುವನು.’’

### ಲೈಂಗಿಕ ಸಂಬಂಧಗಳ ಬಗ್ಗೆ ನಿಯಮಗಳು

18 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ: 2‘‘ಇಸ್ರೇಲರಿಗೆ ಹೀಗೆ ಹೇಳು: ನಾನು ನಿಮ್ಮ ದೇವರಾಗಿರುವ ಯೆಹೋವನು. 3ಹಿಂದೆ ನೀವು ಈಜಿಪ್ಟಿನಲ್ಲಿ ವಾಸಿಸಿದಿರಿ. ಈಜಿಪ್ಟಿನ ಜನರು ಆಚರಿಸಲ್ಪಡುವ ಆಚಾರಗಳನ್ನು ನಡಿಸಬಾರದು. ಆ ದೇಶದಲ್ಲಿ ಮಾಡುತ್ತಿದ್ದ ಕಾರ್ಯಗಳನ್ನು ನೀವು ಮಾಡಬಾರದು. ನಾನು ನಿಮ್ಮನ್ನು ಕಾನಾನಿಗೆ ನಡೆಸುತ್ತಿದ್ದೇನೆ. ಆ ದೇಶದಲ್ಲಿ ಮಾಡುವ ಕಾರ್ಯಗಳನ್ನು ನೀವು ಮಾಡಕೂಡದು. ಅವರ ಸಂಪ್ರದಾಯಗಳನ್ನು ಅನುಸರಿಸಬೇಡಿ. 4ನೀವು ನನ್ನ ನಿಯಮಗಳಿಗೆ ವಿಧೇಯರಾಗಿ ನನ್ನ ಕಟ್ಟಳೆಗಳನ್ನು ಅನುಸರಿಸ ಬೇಕು. ಆ ನಿಯಮಗಳನ್ನು ತಪ್ಪದೆ ಪಾಲಿಸಿರಿ. ಯಾಕಂದರೆ ನಾನು ನಿಮ್ಮ ದೇವರಾದ ಯೆಹೋವನು. 5ಆದ್ದರಿಂದ ನೀವು ನನ್ನ ಕಟ್ಟಳೆಗಳಿಗೆ ಮತ್ತು ನಿಯಮಗಳಿಗೆ ವಿಧೇಯರಾಗಬೇಕು. ಒಬ್ಬನು ನನ್ನ ಕಟ್ಟಳೆಗಳಿಗೆ ಮತ್ತು ನಿಯಮಗಳಿಗೆ ವಿಧೇಯನಾದರೆ, ಅವನು ಜೀವಿಸುವನು! ನಾನೇ ಯೆಹೋವನು! 6‘‘ನೀವು ಎಂದಿಗೂ ನಿಮ್ಮ ಹತ್ತಿರದ ಸಂಬಂಧಿಗಳೊಂದಿಗೆ ಲೈಂಗಿಕ ಸಂಬಂಧ * ಮಾಡಬಾರದು. ನಾನೇ ಯೆಹೋವನು!

7‘‘ತಾಯಿಯೊಂದಿಗೆ ಲೈಂಗಿಕ ಸಂಬಂಧ ಮಾಡಿ ನಿಮ್ಮ ತಂದೆಗೆ ಎಂದಿಗೂ ಅವಮಾನ ತರಬಾರದು. ಆಕೆ ನಿಮ್ಮ ತಾಯಿಯಾಗಿದ್ದಾಳೆ. ನೀವು ಆಕೆಯೊಂದಿಗೆ ಎಂದಿಗೂ ಲೈಂಗಿಕ ಸಂಬಂಧ ಮಾಡಬಾರದು. 8ತಂದೆಯ ಹೆಂಡತಿಯೊಂದಿಗೂ ಲೈಂಗಿಕ ಸಂಬಂಧ ಮಾಡಬಾರದು. ಅದು ನಿಮ್ಮ ತಂದೆಗೆ ಅವಮಾನ ತರುವುದು.

9‘‘ಸಹೋದರಿಯೊಂದಿಗೆ, ಅಂದರೆ ನಿಮ್ಮ ತಂದೆ ಅಥವಾ ತಾಯಿಯ ಮಗಳೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು. ನಿಮ್ಮ ಸಹೋದರಿಯು (ನಿಮ್ಮ) ಮನೆಯಲ್ಲಾಗಲೀ* ಅಥವಾ ಇನ್ನೊಂದು ಸ್ಥಳದಲ್ಲಾಗಲೀ ಹುಟ್ಟಿದರೂ ಆಕೆಯೊಡನೆ ಲೈಂಗಿಕ ಸಂಬಂಧ ಮಾಡಬಾರದು.

10‘‘ನೀವು ನಿಮ್ಮ ಮೊಮ್ಮಗಳೊಡನೆ ಲೈಂಗಿಕ ಸಂಬಂಧ ಮಾಡಬಾರದು. ಅದು ನಿಮಗೆ ಅವಮಾನ ತರುವುದು.

11‘‘ತಂದೆಗೆ ಮತ್ತು ಅವನ ಹೆಂಡತಿಗೆ ಒಬ್ಬ ಮಗಳಿದ್ದರೆ, ಆಕೆ ನಿಮ್ಮ ಸಹೋದರಿಯಾಗಿದ್ದಾಳೆ. ನೀವು ಆಕೆಯೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು.

12‘‘ತಂದೆಯ ಸಹೋದರಿಯೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು. ಆಕೆಯು ನಿಮ್ಮ ತಂದೆಯ ಹತ್ತಿರದ ಸಂಬಂಧಿ. 13ತಾಯಿಯ ಸಹೋದರಿಯೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು. ಆಕೆಯು ನಿಮ್ಮ ತಾಯಿಯ ಹತ್ತಿರದ ಸಂಬಂಧಿಯಾಗಿದ್ದಾಳೆ. 14ನೀವು ನಿಮ್ಮ ತಂದೆಯ ಸಹೋದರನ ಹೆಂಡತಿಯೊಡನೆ ಲೈಂಗಿಕ ಸಂಬಂಧವಿಟ್ಟುಕೊಂಡರೆ ಅವನನ್ನು ಅವಮಾನ ಪಡಿಸಿದಂತಾಗುವುದು. ಯಾಕಂದರೆ ಅವರು ನಿಮ್ಮ ದೊಡ್ಡಮ್ಮ ಅಥವಾ ಚಿಕ್ಕಮ್ಮ.

15‘‘ಸೊಸೆಯೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು. ಆಕೆಯು ನಿಮ್ಮ ಮಗನ ಹೆಂಡತಿ.

16‘‘ಸಹೋದರನ ಹೆಂಡತಿಯೊಡನೆ ಲೈಂಗಿಕ ಸಂಬಂಧ ಮಾಡಬಾರದು. ಅಂಥ ಸಂಬಂಧವು ನಿಮ್ಮ ಸಹೋದರನಿಗೆ ಅವಮಾನವನ್ನು ಉಂಟುಮಾಡುವುದು.

17‘‘ಒಬ್ಬ ಸ್ತ್ರೀಯೊಡನೆಯೂ ಆಕೆಯ ಮಗಳೊಡನೆಯೂ ಲೈಂಗಿಕ ಸಂಬಂಧ ಮಾಡಬಾರದು. ಆ ಸ್ತ್ರೀಯ ಮೊಮ್ಮಗಳೊಡನೆಯೂ ಲೈಂಗಿಕ ಸಂಬಂಧ ಮಾಡಬಾರದು. ಈ ಮೊಮ್ಮಗಳು ಈ ಸ್ತ್ರೀಯ ಮಗನ ಅಥವಾ ಮಗಳ ಮಗಳಾಗಿರಬಹುದು. ಆಕೆಯ ಮೊಮ್ಮಕ್ಕಳಾದ ಹೆಣ್ಣುಮಕ್ಕಳು ಆಕೆಯ ಹತ್ತಿರದ ಸಂಬಂಧಿಕರಾಗಿದ್ದಾರೆ. (ಅವರೊಡನೆ ಲೈಂಗಿಕ ಸಂಬಂಧ) ಮಾಡುವುದು ತಪ್ಪು.

18‘‘ಹೆಂಡತಿ ಇನ್ನೂ ಜೀವದಿಂದಿರುವಾಗ, ಆಕೆಯ ಸಹೋದರಿಯನ್ನು ಹೆಂಡತಿಯನ್ನಾಗಿ ತೆಗೆದುಕೊಳ್ಳಬಾರದು. ಇಲ್ಲವಾದರೆ ಆ ಇಬ್ಬರು ಸಹೋದರಿಯರು ಒಬ್ಬರಿಗೊಬ್ಬರು ವೈರಿಗಳಾಗುವರು. ಹೆಂಡತಿಯ ಸಹೋದರಿಯೊಂದಿಗೆ ಲೈಂಗಿಕ ಸಂಬಂಧ ಮಾಡಬಾರದು.

---

**ಲೈಂಗಿಕ ಸಂಭಂಧ** ಅಕ್ಷರಶಃ ‘‘ಬೆತ್ತಲೆಯನ್ನು ಮುಚ್ಚದೆ’’

**ಸಹೋದರಿಯ ಮನೆ** ಅಥವಾ ‘‘ಕುಟುಂಬದವರು.’’ ಒಬ್ಬನಿಗೆ ಅನೇಕ ಹೆಂಡತಿಯರಿದ್ದರೆ, ಪ್ರತಿಯೊಬ್ಬ ಹೆಂಡತಿಯು ಮತ್ತು ಅವಳ ಮಕ್ಕಳು ತಮ್ಮದೇ ಆದ ಗುಡಾರವನ್ನು ಅಥವಾ ಮನೆಯ ಒಂದು ಭಾಗವನ್ನು ಹೊಂದಿರುತ್ತಿದ್ದರು. ಅವರು ಕುಟುಂಬದಲ್ಲಿಯೇ ಒಂದು ಚಿಕ್ಕ ಕುಟುಂಬದಂತೆ ಇರುತ್ತಿದ್ದರು. ಆದ್ದರಿಂದ, ಒಬ್ಬನು ತನ್ನ ತಂದೆಯ ಹೆಣ್ಣು ಮಕ್ಕಳಲ್ಲಿ ಅವರು ಸಹೋದರಿಯಾಗಿರಲೀ ಅಥವಾ ರಕ್ತ ಸಂಬಂಧದ ಸಹೋದರಿಯಾಗಿರಲೀ ಯಾರೊಡನೆಯೂ ಲೈಂಗಿಕ ಸಂಬಂಧ ಮಾಡಬಾರದೆಂಬುದು ಇದರರ್ಥವಿರಬಹುದು.

19‘‘ಅಲ್ಲದೆ ಸ್ತ್ರೀಯು ಮುಟ್ಟಿನಿಂದ ಅಶುದ್ಧಳಾಗಿರು
ವಾಗ ಲೈಂಗಿಕ ಸಂಬಂಧಕ್ಕಾಗಿ ಆಕೆಯ ಹತ್ತಿರ ಹೋಗ
ಬಾರದು.
20‘‘ನೆರೆಯವನ ಹೆಂಡತಿಯೊಂದಿಗ ಲೈಂಗಿಕ ಸಂಬಂಧ
ಮಾಡಬಾರದು. ಇಂಥ ಸಂಬಂಧವು ನಿಮ್ಮನ್ನು ಅಶುದ್ಧರ
ನ್ನಾಗಿ ಮಾಡುವುದು.
21‘‘ನೀವು ನಿಮ್ಮ ಯಾವ ಮಕ್ಕಳನ್ನೂ (ಅಗ್ನಿಯ
ಮೂಲಕ) ಮೊಲೆಕನಿಗೆ ಕೊಡಬಾರದು. ಇಲ್ಲವಾದರೆ
ನೀವು ನಿಮ್ಮ ದೇವರ ಹೆಸರನ್ನು ಅಪಕೀರ್ತಿಗೆ ಗುರಿ
ಮಾಡುವಿರಿ. ನಾನೇ ಯೆಹೋವನು!
22‘‘ಸ್ತ್ರೀಯನ್ನು ಸಂಗಮಿಸುವಂತೆ ಪುರುಷನನ್ನು ಸಂಗ
ಮಿಸಬಾರದು. ಅದು ಭಯಂಕರ ಪಾಪ!
23‘‘ಪಶುವಿನೊಡನೆ ಲೈಂಗಿಕ ಸಂಬಂಧ ಮಾಡ
ಬಾರದು. ಇಂಥ ಸಂಬಂಧವು ನಿಮ್ಮನ್ನು ಅಪವಿತ್ರರನ್ನಾಗಿ
ಮಾಡುವುದು. ಅಲ್ಲದೆ ಸ್ತ್ರೀಯು ಪಶುವಿನೊಡನೆ ಲೈಂಗಿಕ
ಸಂಬಂಧ ಪಡೆಯಬಾರದು. ಇಂಥ ಸಂಬಂಧ ಸ್ವಭಾವಕ್ಕೆ
ವಿರುದ್ಧವಾದದ್ದು.
24‘‘ಆ ದುರಾಚಾರಗಳಲ್ಲಿ ಯಾವುದರಿಂದಲೂ
ನಿಮ್ಮನ್ನು ಅಶುದ್ಧರನ್ನಾಗಿ ಮಾಡಿಕೊಳ್ಳಬೇಡಿರಿ. ನಾನು
ಜನಾಂಗಗಳನ್ನು ಅವರ ದೇಶಗಳಿಂದ ಹೊರಡಿಸಿ ಅವರ
ದೇಶವನ್ನು ನಿಮಗೆ ಕೊಡುತ್ತಿದ್ದೇನೆ. ಯಾಕಂದರೆ ಅವರು
ಅಂಥ ಭಯಂಕರ ಪಾಪಗಳನ್ನು ಮಾಡಿದರು. 25ಆದ್ದ
ರಿಂದ ದೇಶವು ಸಹ ಅಶುದ್ಧವಾಯಿತು. ಈಗ ನಾನು
ಅದರ ಪಾಪಗಳಿಗಾಗಿ ದಂಡಿಸಿದೆನು. (ಅವುಗಳ ದೆಸೆ
ಯಿಂದ ದೇಶವು ರೋಗಗ್ರಸ್ತವಾಗಿದೆ.) ಆ ದೇಶವು
ತನ್ನಲ್ಲಿ ವಾಸಿಸಿದ ಆ ಜನರನ್ನು ಕಾರಿಬಿಟ್ಟಿದೆ.
26‘‘ಆದ್ದರಿಂದ ನೀವು ನನ್ನ ಕಟ್ಟಳೆಗಳಿಗೂ ನಿಯಮ
ಗಳಿಗೂ ಆಜ್ಞಾವಿಧಿಗಳಿಗೂ ವಿಧೇಯರಾಗಬೇಕು. ನೀವು
ಆ ಭಯಂಕರ ಪಾಪಗಳಲ್ಲಿ ಯಾವುದನ್ನೂ ಮಾಡ
ಬಾರದು. ಆ ವಿಧಿಗಳು ಇಸ್ರೇಲರಿಗಾಗಿ ಮತ್ತು ನಿಮ್ಮ
ಮಧ್ಯದಲ್ಲಿ ವಾಸಿಸುವ ಜನರಿಗಾಗಿ ಇರುತ್ತವೆ. 27ನಿಮ
ಗಿಂತ ಮುಂಚೆ ಈ ದೇಶದಲ್ಲಿ ವಾಸಿಸಿದ ಜನರು ಆ
ಭಯಂಕರ ಕಾರ್ಯಗಳನ್ನು ಮಾಡಿದರು. ಆದ್ದರಿಂದ
ದೇಶವು ಹೊಲೆಯಾಯಿತು. 28ನೀವು ಈ ಕಾರ್ಯಗಳನ್ನು
ಮಾಡಿದರೆ, ನೀವು ಆ ದೇಶವನ್ನು ಹೊಲೆಮಾಡುವಿರಿ.
ಅದು ಮೊದಲು ವಾಸಿಸಿದ ಜನಾಂಗಗಳನ್ನು ಕಾರಿಬಿಟ್ಟಂತೆ
ನಿಮ್ಮನ್ನೂ ಕಾರಿಬಿಡುವುದು. 29ಯಾವನಾದರೂ ಆ
ಭಯಂಕರ ಪಾಪಗಳಲ್ಲಿ ಯಾವುದನ್ನಾದರೂ ಮಾಡಿ
ದರೆ, ಆ ವ್ಯಕ್ತಿಯನ್ನು ಅವನ ಜನರಿಂದ ತೆಗೆದು ಹಾಕ
ಬೇಕು. 30ಅನ್ಯಜನರು ಆ ಭಯಂಕರ ಪಾಪಗಳನ್ನು
ಮಾಡಿದ್ದಾರೆ. ಆದರೆ ನೀವು ನನ್ನ ಕಟ್ಟಳೆಗಳಿಗೆ ವಿಧೇಯ
ರಾಗಬೇಕು. ನೀವು ಆ ಭಯಂಕರ ಪಾಪಗಳಲ್ಲಿ ಯಾವು
ದನ್ನೂ ಮಾಡಬಾರದು. ಆ ಭಯಂಕರ ಪಾಪಗಳಿಂದ
ನಿಮ್ಮನ್ನು ಹೊಲೆ ಮಾಡಿಕೊಳ್ಳಬೇಡಿರಿ. ನಾನೇ ನಿಮ್ಮ
ದೇವರಾದ ಯೆಹೋವನು.’’

### ಇಸ್ರೇಲರು ದೇವಜನರಾಗಿದ್ದಾರೆ

19 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ಇಸ್ರೇಲರಿಗೆ ಹೀಗೆ ಹೇಳು: ನಾನೇ ನಿಮ್ಮ ದೇವ
ರಾದ ಯೆಹೋವನು. ನಾನು ಪರಿಶುದ್ಧನಾಗಿರು
ವಂತೆಯೇ ನೀವೂ ಪರಿಶುದ್ಧರಾಗಿರಬೇಕು!
3‘‘ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ತಂದೆತಾಯಿಗಳನ್ನು
ಸನ್ಮಾನಿಸಬೇಕು; ನನ್ನ ವಿಶ್ರಾಂತಿಯ ವಿಶೇಷ ದಿನ
ಗಳನ್ನು* ಆಚರಿಸಬೇಕು. ನಾನೇ ನಿಮ್ಮ ದೇವರಾದ
ಯೆಹೋವನು!
4‘‘ವಿಗ್ರಹಾರಾಧನೆ ಮಾಡಬೇಡಿರಿ! ಎರಕದ ವಿಗ್ರಹ
ಗಳನ್ನು ಮಾಡಿಕೊಳ್ಳಬೇಡಿರಿ. ನಾನೇ ನಿಮ್ಮ ದೇವರಾದ
ಯೆಹೋವನು!
5‘‘ನೀವು ಸಮಾಧಾನ ಯಜ್ಞಗಳನ್ನು ಯೆಹೋವನಿಗೆ
ಸಮರ್ಪಿಸುವಾಗ, ನೀವು ಅಂಗೀಕೃತರಾಗುವಂತೆ ಅವು
ಗಳನ್ನು ಅರ್ಪಿಸಬೇಕು. 6ನೀವು ಅರ್ಪಿಸಿದ ದಿನದಲ್ಲಿ
ಅಥವಾ ಮರುದಿನದಲ್ಲಿ ಅದನ್ನು ತಿನ್ನಬಹುದು. ಆದರೆ
ಆ ಯಜ್ಞದಲ್ಲಿ ಏನಾದರೂ ಮೂರನೆಯ ದಿನದವರೆಗೆ
ಉಳಿದರೆ, ನೀವು ಅದನ್ನು ಬೆಂಕಿಯಿಂದ ಸುಟ್ಟುಬಿಡ
ಬೇಕು. 7ಅದರಲ್ಲಿ ಯಾವುದನ್ನಾದರೂ ಮೂರನೆಯ
ದಿನದಲ್ಲಿ ತಿಂದರೆ, ಅದು ಅಪವಿತ್ರವಾಗುವುದು, ಅದು
ಅಂಗೀಕೃತವಾಗುವುದಿಲ್ಲ. 8ಒಬ್ಬನು ಅದನ್ನು ಮೂರ
ನೆಯ ದಿನದಲ್ಲಿ ತಿಂದರೆ ಅವನು ಪಾಪಮಾಡಿದ ದೋಷಿ
ಯಾಗಿರುವನು. ಯಾಕಂದರೆ ಯೆಹೋವನಿಗೆ ಮೀಸ
ಲಾದ ಪವಿತ್ರ ವಸ್ತುಗಳ ವಿಷಯದಲ್ಲಿ ಅವನಿಗೆ ಗೌರವ
ವಿಲ್ಲ; ಆ ವ್ಯಕ್ತಿಯನ್ನು ಅವನ ಜನರಿಂದ ತೆಗೆದು
ಹಾಕಬೇಕು.
9‘‘ಸುಗ್ಗಿಕಾಲದಲ್ಲಿ ನಿಮ್ಮ ಬೆಳೆಯನ್ನು ಕೊಯ್ಯುವಾಗ,
ಹೊಲಗಳ ಮೂಲೆಗಳಲ್ಲಿರುವುದನ್ನೆಲ್ಲಾ ಕೊಯ್ಯ
ಬೇಡಿರಿ; ಧಾನ್ಯವೇನಾದರೂ ನೆಲದ ಮೇಲೆ ಬಿದ್ದರೆ,
ಅದನ್ನು ಕೂಡಿಸಿಕೊಳ್ಳಬಾರದು. 10ನಿಮ್ಮ ದ್ರಾಕ್ಷಿ ತೋಟ
ಗಳಲ್ಲಿರುವ ದ್ರಾಕ್ಷಿಗಳನ್ನೆಲ್ಲಾ ತೆಗೆದುಕೊಳ್ಳಬೇಡಿರಿ;
ನೆಲದ ಮೇಲೆ ಬೀಳುವ ದ್ರಾಕ್ಷಿಹಣ್ಣುಗಳನ್ನು ಹೆಕ್ಕಿಕೊಳ್ಳ
ಬಾರದು. ಯಾಕಂದರೆ ನೀವು ಅವುಗಳನ್ನು ಬಡವರಿ
ಗಾಗಿಯೂ ನಿಮ್ಮ ದೇಶದಲ್ಲಿ ವಾಸಿಸಲು ಬಂದ ಪರ
ದೇಶಸ್ಥರಿಗಾಗಿಯೂ ಬಿಡಬೇಕು. ನಾನೇ ನಿಮ್ಮ ದೇವ
ರಾದ ಯೆಹೋವನು!

---

**ವಿಶ್ರಾಂತಿಯ ವಿಶೇಷದಿನಗಳನ್ನು** ಅಥವಾ ‘‘ಸಬ್ಬತ್ ದಿನಗಳು.’’ ಇದು ಶನಿವಾರವಾಗಿರಬಹುದು ಅಥವಾ ಜನರು ಕೆಲಸ ಮಾಡದ ವಿಶೇಷ ದಿನಗಳಾಗಿದ್ದಿರಬಹುದು.

[11]“ನೀವು ಕದಿಯಬಾರದು; ಮೋಸಮಾಡಬಾರದು; ಒಬ್ಬರಿಗೊಬ್ಬರು ಸುಳ್ಳಾಡಬಾರದು. [12]ನೀವು ನನ್ನ ಹೆಸರನ್ನು ಉಪಯೋಗಿಸಿ ಸುಳ್ಳಾಣೆ ಇಟ್ಟುಕೊಳ್ಳ ಬಾರದು; ಇಲ್ಲವಾದರೆ ನೀವು ನಿಮ್ಮ ದೇವರ ಹೆಸರನ್ನು ಅಪಕೀರ್ತಿಗೆ ಗುರಿಪಡಿಸುವಿರಿ; ನಾನೇ ನಿಮ್ಮ ದೇವರಾದ ಯೆಹೋವನು!

[13]“ನಿಮ್ಮ ನೆರೆಯವನಿಗೆ ಕೆಡಕುಗಳನ್ನು ಮಾಡ ಬಾರದು. ನೀವು ಅವನನ್ನು ಸುಲಿಗೆ ಮಾಡಬಾರದು. ನಿಮ್ಮ ಕೂಲಿಯವರ ಕೂಲಿಯನ್ನು ಮರುದಿನದ ಮುಂಜಾನೆಯವರೆಗೆ ಹಿಡಿದಿಟ್ಟುಕೊಳ್ಳಬಾರದು.

[14]“ನೀವು ಕಿವುಡನನ್ನು ಶಪಿಸಬಾರದು. ಕುರುಡನು ಬೀಳುವಂತೆ ನೀವು ಅವನ ಮುಂದೆ ಅಡ್ಡವಾಗಿ ಏನನ್ನೂ ಇಡಬಾರದು. ಆದರೆ ನೀವು ನಿಮ್ಮ ದೇವರನ್ನು ಸನ್ಮಾನಿಸ ಬೇಕು. ನಾನೇ ನಿಮ್ಮ ದೇವರಾದ ಯೆಹೋವನು.

[15]“ನೀವು ಕೊಡುವ ತೀರ್ಪು ನ್ಯಾಯವಾಗಿರಬೇಕು. ಬಡವರ ಬಡತನವನ್ನಾಗಲೀ ಪ್ರಾಮುಖ್ಯರ ದೊಡ್ಡಸ್ಥಿಕೆ ಯನ್ನಾಗಲೀ ಗಮನಿಸದೆ ಪಕ್ಷಪಾತವಿಲ್ಲದೆ ತೀರ್ಪುಕೊಡ ಬೇಕು. ನೀವು ನಿಮ್ಮ ನೆರೆಯವನಿಗೆ ತೀರ್ಪುಮಾಡುವಾಗ ನ್ಯಾಯದ ತೀರ್ಪುಕೊಡಿರಿ. [16]ಬೇರೆ ಜನರ ವಿರುದ್ಧ ಚಾಡಿ ಹೇಳಬಾರದು. ನಿಮ್ಮ ನೆರೆಯವನ ಪ್ರಾಣವನ್ನು ಅಪಾ ಯಕ್ಕೆ ಈಡು ಮಾಡುವ ಯಾವ ಕಾರ್ಯವನ್ನೂ ನೀವು ಮಾಡಬಾರದು. ನಾನೇ ಯೆಹೋವನು!

[17]“ನೀವು ನಿಮ್ಮ ಸಹೋದರನನ್ನು ಮನಸ್ಸಿನಲ್ಲಿ ದ್ವೇಷಿಸಬಾರದು. ನಿಮ್ಮ ಸಹೋದರನು ಏನಾದರೂ ತಪ್ಪುಮಾಡಿದರೆ, ಅವನೊಡನೆ ಅದರ ಕುರಿತು ಮಾತಾಡು. ಅವನ ಅಪರಾಧದಲ್ಲಿ ನೀವು ಪಾಲುಹೊಂದ ದಂತೆ ನೇರವಾಗಿ ಗದರಿಸಿ. ಆಗ ನೀವು ಅವನನ್ನು ಕ್ಷಮಿಸ ಬಹುದು. [18]ಜನರು ನಿಮಗೆ ಮಾಡುವ ಕೆಟ್ಟಕಾರ್ಯ ಗಳನ್ನು ಮರೆತುಬಿಡಿರಿ. ನಿಮ್ಮ ಜನರಲ್ಲಿ ಒಬ್ಬನಾಗಿರು ವವನ ಮೇಲೆ ಸೇಡನ್ನು ತೀರಿಸಿಕೊಳ್ಳಲು ಪ್ರಯತ್ನಿಸ ಬೇಡಿರಿ; ದ್ವೇಷವನ್ನೂ ಇಟ್ಟುಕೊಳ್ಳಬೇಡಿ. ನಿಮ್ಮ ನೆರೆ ಯವನನ್ನು ನಿಮ್ಮಂತೆಯೇ ಪ್ರೀತಿಸಿರಿ. ನಾನೇ ಯೆಹೋವನು!

[19]“ನೀವು ನನ್ನ ಕಟ್ಟಳೆಗಳಿಗೆ ವಿಧೇಯರಾಗಿರಬೇಕು. ಎರಡು ಬೇರೆ ಜಾತಿಯ ಪಶುಗಳನ್ನು ಒಟ್ಟಿಗೆ ಸೇರಿಸಿ ಈಯಿಸಬಾರದು. ನಿಮ್ಮ ಹೊಲಗಳಲ್ಲಿ ಎರಡು ವಿಧದ ಬೀಜಗಳನ್ನು ಬಿತ್ತಬಾರದು. ಎರಡು ವಿಧದ ದಾರಗಳನ್ನು ಸೇರಿಸಿ ಮಾಡಿದ ಬಟ್ಟೆಯನ್ನು ಧರಿಸಿಕೊಳ್ಳಬಾರದು.

[20]“ಇನ್ನೊಬ್ಬನ ದಾಸಿಯಾಗಿರುವ ಸ್ತ್ರೀಯೊಡನೆ ಒಬ್ಬನು ಲೈಂಗಿಕ ಸಂಬಂಧವಿಟ್ಟುಕೊಂಡಿದ್ದರೆ, ಈ ದಾಸಿಯು ಹಣದಿಂದಾಗಲೀ ಉಚಿತವಾಗಿಯಾಗಲೀ ಬಿಡುಗಡೆಯಾಗಲು ಸಾಧ್ಯವಿಲ್ಲದಿದ್ದರೆ ಅವರಿಬ್ಬರಿಗೆ ಶಿಕ್ಷೆ ವಿಧಿಸಬೇಕು. ಆದರೆ ಅವರಿಗೆ ಮರಣ ಶಿಕ್ಷೆಯಾಗ ಬಾರದು. ಯಾಕಂದರೆ ಸ್ತ್ರೀಯು ಸ್ವತಂತ್ರಳಾಗಿಲ್ಲ. [21]ಪುರುಷನು ತನ್ನ ದೋಷಪರಿಹಾರಕ ಯಜ್ಞಕ್ಕಾಗಿ ಒಂದು ಟಗರನ್ನು ಯೆಹೋವನ ಬಳಿಗೆ ದೇವದರ್ಶನ ಗುಡಾರದ ಬಾಗಿಲಿಗೆ ತರಬೇಕು. ಅವನು ದೋಷಪರಿ ಹಾರಕ ಯಜ್ಞಕ್ಕಾಗಿ ಒಂದು ಟಗರನ್ನು ತರಬೇಕು. [22]ಯಾಜಕನು ಅವನನ್ನು ಶುದ್ಧಿಮಾಡುವ ಕಾರ್ಯ ಗಳನ್ನು ಮಾಡುವನು. ಯಾಜಕನು ಯೆಹೋವನ ಸನ್ನಿಧಿ ಯಲ್ಲಿ ಟಗರನ್ನು ದೋಷ ಪರಿಹಾರಕ ಯಜ್ಞವಾಗಿ ಅರ್ಪಿಸುವನು. ಅದು ಆ ಪುರುಷನು ಮಾಡಿದ ಪಾಪಗಳ ಪರಿಹಾರಕ್ಕಾಗಿರುವುದು. ಆಗ ಅವನಿಗೆ ಕ್ಷಮಾಪಣೆ ಯಾಗುವುದು.

[23]“ಮುಂದೆ ನೀವು ನಿಮ್ಮ ದೇಶವನ್ನು ಪ್ರವೇಶಿಸುವಿರಿ. ಆ ಸಮಯದ ಆಹಾರಕ್ಕಾಗಿ ಅನೇಕ ವಿಧಗಳ ಮರಗಳನ್ನು ನೆಡುವಿರಿ. ಸಸಿಯನ್ನು ನೆಟ್ಟನಂತರ, ನೀವು ಆ ಮರದಿಂದ ಹಣ್ಣನ್ನು ಉಪಯೋಗಿಸುವುದಕ್ಕೆ ಮೂರು ವರ್ಷಗಳು ಕಾಯಬೇಕು. ನೀವು ಆ ಹಣ್ಣನ್ನು ಉಪಯೋಗಿಸ ಬಾರದು. [24]ನಾಲ್ಕನೆಯ ವರ್ಷದಲ್ಲಿ ಆ ಮರದ ಹಣ್ಣು ಯೆಹೋವನದಾಗುವುದು. ಅದು ಯೆಹೋವನ ಸ್ತುತಿಗೆ ಅರ್ಪಿತವಾಗುವ ಪವಿತ್ರ ಕಾಣಿಕೆಯಾಗಿರುವುದು. [25]ಬಳಿಕ ಐದನೆಯ ವರ್ಷದಲ್ಲಿ, ನೀವು ಆ ಮರದ ಹಣ್ಣನ್ನು ತಿನ್ನಬಹುದು ಮತ್ತು ಮರವು ನಿಮಗೆ ಹೆಚ್ಚೆಚ್ಚಾಗಿ ಹಣ್ಣನ್ನು ನೀಡುವುದು. ನಾನೇ ನಿಮ್ಮ ದೇವರಾದ ಯೆಹೋವನು!

[26]“ರಕ್ತಸಹಿತವಾದ ಮಾಂಸವನ್ನು ನೀವು ತಿನ್ನಬಾರದು.

“ನೀವು ಕಣಿ ಹೇಳಬಾರದು; ಮಂತ್ರತಂತ್ರಗಳನ್ನು ಮಾಡಬಾರದು. [27]“ನಿಮ್ಮ ಮುಖದ ಪಾರ್ಶ್ವದಲ್ಲಿ ಬೆಳೆ ಯುವ ಕೂದಲನ್ನು ನೀವು ಕತ್ತರಿಸಬಾರದು. ನಿಮ್ಮ ಮುಖದ ಪಾರ್ಶ್ವದಲ್ಲಿರುವ ಗಡ್ಡವನ್ನು ಕತ್ತರಿಸಿಕೊಳ್ಳು ವುದರ ಮೂಲಕ ನೀವು ನಿಮ್ಮ ಗಡ್ಡವನ್ನು ವಿಕಾರ ಮಾಡಿ ಕೊಳ್ಳಬಾರದು. [28]ಸತ್ತವರನ್ನು ಜ್ಞಾಪಕ ಮಾಡಿಕೊಳ್ಳು ವುದಕ್ಕಾಗಿ ನಿಮ್ಮ ದೇಹವನ್ನು ಗಾಯಮಾಡಿಕೊಳ್ಳ ಬಾರದು. ಶರೀರದ ಮೇಲೆ ಹಚ್ಚೇ ಚುಚ್ಚಿಸಿಕೊಳ್ಳ ಬಾರದು. ನಾನೇ ಯೆಹೋವನು!

[29]“ಮಗಳನ್ನು ಸೂಳೆಯನ್ನಾಗಿ ಮಾಡಬಾರದು. ಇದ ರಿಂದ ಸೂಳೆಗಾರಿಕೆ ಹೆಚ್ಚಾಗುತ್ತದೆ. ನಿಮ್ಮ ದೇಶದಲ್ಲಿ ಸೂಳೆಗಾರಿಕೆ ಇರದಂತೆ ನೋಡಿಕೊಳ್ಳಿರಿ. ಇಂಥ ಪಾಪ ದಿಂದ ನಿಮ್ಮ ದೇಶವು ತುಂಬಿಹೋಗಲು ಬಿಡಬೇಡಿರಿ.

[30]“ನೀವು ನನ್ನ ಸಬ್ಬತ್ ದಿನಗಳನ್ನು ಅನುಸರಿಸಬೇಕು. ನನ್ನ ವಿಶ್ರಾಂತಿಯ ವಿಶೇಷ ದಿನಗಳಲ್ಲಿ ನೀವು ಕೆಲಸ ಮಾಡ ಬಾರದು. ನೀವು ನನ್ನ ಪವಿತ್ರಸ್ಥಳವನ್ನು ಗೌರವಿಸಬೇಕು. ನಾನೇ ಯೆಹೋವನು!

31ಸಲಹೆಗಾಗಿ ಸತ್ತವರಲ್ಲಿ ವಿಚಾರಿಸುವವರ ಮತ್ತು
ಬೇತಾಳಿಕರ ಬಳಿಗೆ ಹೋಗಬೇಡಿರಿ. ಅವರು ನಿಮ್ಮನ್ನು
ಕೇವಲ ಅಶುದ್ಧರನ್ನಾಗಿ ಮಾಡುವರು. ನಾನೇ ನಿಮ್ಮ
ದೇವರಾದ ಯೆಹೋವನು!
32“ವೃದ್ಧರ ಮುಂದೆ ಎದ್ದು ನಿಂತುಕೊಳ್ಳಿರಿ. ಹಿರಿ
ಯರಿಗೆ ಗೌರವ ಕೊಡಿರಿ. ನಿಮ್ಮ ದೇವರನ್ನು ಸನ್ಮಾನಿಸಿರಿ.
ನಾನೇ ಯೆಹೋವನು!
33“ನಿಮ್ಮ ದೇಶದಲ್ಲಿ ವಾಸಿಸುವ ಪರದೇಶಸ್ಥರಿಗೆ ಕೆಟ್ಟ
ದ್ದನ್ನು ಮಾಡಬೇಡಿರಿ. 34ನಿಮ್ಮ ಸ್ವಂತ ದೇಶದವರೊಡನೆ
ವರ್ತಿಸುವ ಪ್ರಕಾರ ಪರದೇಶಸ್ಥರೊಡನೆ ವರ್ತಿಸಿರಿ.
ನಿಮ್ಮನ್ನು ಪ್ರೀತಿಸುವಂತೆ ಪರದೇಶಸ್ಥರನ್ನು ಪ್ರೀತಿಸಿರಿ.
ಯಾಕಂದರೆ ನೀವು ಸಹ ಒಂದು ಕಾಲದಲ್ಲಿ ಈಜಿಪ್ಟಿ
ನಲ್ಲಿದ್ದಾಗ ಪರದೇಶಸ್ಥರಾಗಿದ್ದಿರಿ. ನಾನೇ ನಿಮ್ಮ
ದೇವರಾದ ಯೆಹೋವನು.
35“ನೀವು ಜನರಿಗೆ ತೀರ್ಪುಮಾಡುವಾಗ, ನ್ಯಾಯ
ವಾಗಿ ತೀರ್ಪುಮಾಡಬೇಕು. ನೀವು ಅಳೆಯುವಾಗ ಮತ್ತು
ತೂಕ ಮಾಡುವಾಗ, ನ್ಯಾಯವಾಗಿ ನಡೆದುಕೊಳ್ಳಬೇಕು.
36ನಿಮ್ಮ ಪುಟ್ಟಿಗಳು ಸರಿಯಾದ ಪ್ರಮಾಣದ್ದಾಗಿರಬೇಕು.
ನಿಮ್ಮ ಕೊಳಗಗಳು ದ್ರವಪದಾರ್ಥಗಳನ್ನು ಸರಿಯಾದ
ಪ್ರಮಾಣದಲ್ಲಿ ಹಿಡಿಸಿಕೊಳ್ಳುವಂತವುಗಳಾಗಿರಬೇಕು.
ನಿಮ್ಮ ತೂಕದ ಕಲ್ಲುಗಳು ಮತ್ತು ತಕ್ಕಡಿಗಳು ವಸ್ತುಗಳನ್ನು
ಸರಿಯಾಗಿ ತೂಕ ಮಾಡುವಂಥವುಗಳಾಗಿರಬೇಕು.
ನಾನೇ ನಿಮ್ಮ ದೇವರಾದ ಯೆಹೋವನು! ನಾನು
ನಿಮ್ಮನ್ನು ಈಜಿಪ್ಟಿನಿಂದ ಹೊರತಂದೆನು.
37“ನೀವು ನನ್ನ ಕಟ್ಟಳೆಗಳನ್ನು ಮತ್ತು ನಿಯಮಗಳನ್ನು
ಜ್ಞಾಪಕಮಾಡಿಕೊಳ್ಳಬೇಕು; ಅವುಗಳಿಗೆ ವಿಧೇಯರಾಗ
ಬೇಕು. ನಾನೇ ಯೆಹೋವನು.”

## ವಿಗ್ರಹಾರಾಧನೆಯ ಕುರಿತು ಎಚ್ಚರಿಕೆ

20 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2“ನೀನು ಇಸ್ರೇಲರಿಗೆ ಹೀಗೆ ಆಜ್ಞಾಪಿಸಬೇಕು.
ನಿಮ್ಮ ದೇಶದಲ್ಲಿರುವ ಒಬ್ಬನು ತನ್ನ ಮಕ್ಕಳಲ್ಲಿ ಒಬ್ಬನನ್ನು
ಸುಳ್ಳುದೇವರಾದ ಮೋಲೆಕನಿಗೆ ಅರ್ಪಿಸಿದರೆ ಅವನನ್ನು
ಕೊಲ್ಲಬೇಕು. ಅವನು ಸ್ವದೇಶಸ್ಥನಾದರೂ ಇಸ್ರೇಲರಲ್ಲಿ
ವಾಸಿಸುವ ಪರದೇಶಸ್ಥನಾದರೂ ಅವನನ್ನು ಕಲ್ಲೆಸೆದು
ಕೊಲ್ಲಬೇಕು. 3ನಾನು ಅವನಿಗೆ ವಿರುದ್ಧವಾಗಿರುವೆನು.
ನಾನು ಅವನನ್ನು ಅವನ ಕುಟುಂಬದಿಂದ ಬೇರ್ಪಡಿಸು
ವೆನು. ಯಾಕಂದರೆ ಅವನು ತನ್ನ ಮಕ್ಕಳನ್ನು ಮೋಲೆಕನಿಗೆ
ಅರ್ಪಿಸುವುದರ ಮೂಲಕ ನನ್ನ ಪವಿತ್ರಾಲಯವನ್ನು
ಅಪವಿತ್ರಗೊಳಿಸಿದನು; ನನ್ನ ನಾಮಕ್ಕೆ ಅವಮಾನ ಮಾಡಿ
ದನು. 4ಒಂದು ವೇಳೆ ದೇಶದ ಜನರು ಅವನು ಮಾಡಿದ
ಕಾರ್ಯವನ್ನು ನಿರ್ಲಕ್ಷಿಸಿ ಅವನನ್ನು ಕೊಲ್ಲದಿದ್ದರೆ,
5ನಾನು ಅವನಿಗೂ ಅವನ ಕುಟುಂಬಕ್ಕೂ ವಿರುದ್ಧನಾಗಿ
ರುವೆನು; ನಾನು ಅವನನ್ನು ಅವನ ಜನರಿಂದ ಬೇರ್ಪಡಿ
ಸುವೆನು. ಮೋಲೆಕನೊಡನೆ ಸೂಳೆತನ ಮಾಡುವ ಅವ
ನನ್ನೂ ಅವನ ಹಿಂಬಾಲಕರನ್ನೂ ಅವರ ಜನರಿಂದ
ಬೇರ್ಪಡಿಸುವೆನು.
6“ಸತ್ತವರಲ್ಲಿ ವಿಚಾರಿಸುವವರ ಮತ್ತು ಬೇತಾಳಿಕರ
ಬಳಿಗೆ ಹೋಗುವ ಯಾವುದೇ ವ್ಯಕ್ತಿಯಾದರೂ ಸರಿಯೇ
ಅವನಿಗೆ ನಾನು ವಿರುದ್ಧವಾಗಿರುವೆನು. ಆ ವ್ಯಕ್ತಿ ನನಗೆ
ಅಪನಂಬಿಗಸ್ತನಾಗಿದ್ದಾನೆ.* ಆದ್ದರಿಂದ ನಾನು
ಅವನನ್ನು ಅವನ ಕುಲದಿಂದ ತೆಗೆದುಹಾಕುವೆನು.
7“ನೀವು ನನಗೆ ವಿಶೇಷ ಜನರಾಗಿದ್ದೀರಿ. ನಿಮ್ಮನ್ನು
ಪವಿತ್ರರನ್ನಾಗಿ ಮಾಡಿಕೊಳ್ಳಿರಿ. ಯಾಕಂದರೆ ನಾನೇ
ನಿಮ್ಮ ದೇವರಾದ ಯೆಹೋವನು. ನಾನು ಪರಿಶುದ್ಧನಾಗಿ
ದ್ದೇನೆ. 8ನನ್ನ ನಿಯಮಗಳನ್ನು ಜ್ಞಾಪಕಮಾಡಿ ಅವುಗಳಿಗೆ
ವಿಧೇಯರಾಗಿರಿ. ನಿಮ್ಮನ್ನು ಪವಿತ್ರರನ್ನಾಗಿ ಮಾಡುವ*
ಯೆಹೋವನೇ ನಾನು. ನಿಮ್ಮನ್ನು ನನ್ನ ವಿಶೇಷ
ಜನರನ್ನಾಗಿ ಮಾಡಿದ್ದೇನೆ.
9“ಯಾವನಾದರೂ ತನ್ನ ತಂದೆಯನ್ನಾಗಲೀ ತಾಯಿ
ಯನ್ನಾಗಲೀ ಶಪಿಸಿದರೆ, ಅವನಿಗೆ ಮರಣ ಶಿಕ್ಷೆಯಾಗ
ಬೇಕು. ಅವನು ತನ್ನ ತಂದೆತಾಯಿಗಳನ್ನು ಶಪಿಸಿದನು.
ಅವನ ಮರಣಕ್ಕೆ* ಅವನೇ ಜವಾಬ್ದಾರನಾಗಿದ್ದಾನೆ.

## ಲೈಂಗಿಕ ಪಾಪಗಳಿಗೆ ವಿಧಿಸತಕ್ಕ ಶಿಕ್ಷೆಗಳು

10“ಒಬ್ಬನು ನೆರೆಯವನ ಹೆಂಡತಿಯೊಡನೆ ಲೈಂಗಿಕ
ಸಂಬಂಧ ಹೊಂದಿದರೆ, ಆಗ ಅವರಿಬ್ಬರೂ ವ್ಯಭಿಚಾರ
ಮಾಡಿದ ದೋಷಿಗಳಾಗಿದ್ದಾರೆ. ಆದ್ದರಿಂದ ಅವರಿಬ್ಬ
ರಿಗೂ ಅಂದರೆ ಗಂಡಸಿಗೂ ಹೆಂಗಸಿಗೂ ಮರಣ ಶಿಕ್ಷೆ
ಯಾಗಬೇಕು! 11ಒಬ್ಬನು ತನ್ನ ತಂದೆಯ ಹೆಂಡತಿ
ಯೊಡನೆ ಲೈಂಗಿಕ ಸಂಬಂಧ ಬೆಳೆಸಿದರೆ, ಅವನಿಗೂ
ಆಕೆಗೂ ಮರಣಶಿಕ್ಷೆಯಾಗಬೇಕು. ಅವನು ತನ್ನ ತಂದೆಗೆ
ಅವಮಾನ ಮಾಡಿದ್ದಾನೆ. ಅವರು ತಮ್ಮ ಮರಣಕ್ಕೆ ತಾವೇ
ಜವಾಬ್ದಾರರಾಗಿದ್ದಾರೆ.
12“ಒಬ್ಬನು ತನ್ನ ಸೊಸೆಯೊಡನೆ ಲೈಂಗಿಕ ಸಂಬಂಧ
ಬೆಳೆಸಿದರೆ, ಅವರಿಬ್ಬರೂ ಕೊಲ್ಲಲ್ಪಡಬೇಕು. ಅವರ ಮರ
ಣಕ್ಕೆ ಅವರೇ ಜವಾಬ್ದಾರರಾಗಿದ್ದಾರೆ. ಅವರು ಬಹಳ ಕೆಟ್ಟ
ದಾದ ಲೈಂಗಿಕ ಪಾಪವನ್ನು ಮಾಡಿದವರಾಗಿದ್ದಾರೆ.
ಅವರು ಕೊಲ್ಲಲ್ಪಡಬೇಕು.

---

**ಅಪನಂಬಿಗಸ್ತನಾಗಿದ್ದಾನೆ** ಅಕ್ಷರಶಃ ನನಗೆ ವಿರುದ್ಧವಾಗಿ ಸೂಳೆತನ ಮಾಡುವವನಾಗಿದ್ದಾನೆ.

**ಪವಿತ್ರರನ್ನಾಗಿ ಮಾಡುವ** ಅಥವಾ ನಿಮ್ಮನ್ನು ವಿಶೇಷ ಜನರನ್ನಾಗಿ ಪ್ರತ್ಯೇಕಿಸುವ.

**ಮರಣ** ಅಕ್ಷರಶಃ “ಅವನ ರಕ್ತವು ಅವನ ತಲೆಯ ಮೇಲಿರುವುದು,”

13‘‘ಒಬ್ಬನು ಸ್ತ್ರೀಯೊಂದಿಗೆ ಸಂಗಮಿಸುವಂತೆ ಪುರುಷ
ನೊಡನೆ ಲೈಂಗಿಕ ಸಂಬಂಧ ಮಾಡಿದರೆ, ಆಗ ಈ ಇಬ್ಬರು
ಪುರುಷರು ಭಯಂಕರವಾದ ಪಾಪ ಮಾಡಿದವರಾಗಿ
ದ್ದಾರೆ. ಅವರಿಗೆ ಮರಣಶಿಕ್ಷೆಯಾಗಬೇಕು. ಅವರು
ಕೊಲ್ಲಲ್ಪಡಬೇಕು. ಅವರ ಮರಣಕ್ಕೆ ಅವರೇ ಜವಾಬ್ದಾರ
ರಾಗಿದ್ದಾರೆ.

14‘‘ಒಬ್ಬನು ಒಬ್ಬ ಸ್ತ್ರೀಯೊಂದಿಗೂ ಅವಳ ತಾಯಿ
ಯೊಂದಿಗೂ ಲೈಂಗಿಕ ಸಂಬಂಧಗಳನ್ನು ಬೆಳೆಸಿದರೆ, ಆಗ
ಇದು ಲೈಂಗಿಕ ಪಾಪವಾಗಿದೆ. ಜನರು ಆ ಮನುಷ್ಯನನ್ನು
ಇಬ್ಬರು ಸ್ತ್ರೀಯರನ್ನು ಬೆಂಕಿಯಿಂದ ಸುಟ್ಟು ಹಾಕಬೇಕು.
ನಿಮ್ಮ ಜನರ ಮಧ್ಯದಲ್ಲಿ ಈ ಲೈಂಗಿಕ ಪಾಪ ನಡೆಯಲು
ಬಿಡಬೇಡಿರಿ.

15‘‘ಒಬ್ಬನು ಪಶುವಿನೊಡನೆ ಲೈಂಗಿಕ ಸಂಬಂಧ ಮಾಡಿ
ದರೆ, ಆ ಮನುಷ್ಯನಿಗೆ ಮರಣಶಿಕ್ಷೆಯಾಗಬೇಕು ಮತ್ತು
ನೀವು ಪಶುವನ್ನು ಕೊಲ್ಲಬೇಕು. 16ಸ್ತ್ರೀಯು ಪಶುವಿ
ನೊಡನೆ ಲೈಂಗಿಕ ಸಂಬಂಧ ಮಾಡಿದರೆ, ಆಗ ನೀವು
ಸ್ತ್ರೀಯನ್ನೂ ಪಶುವನ್ನೂ ಕೊಲ್ಲಬೇಕು. ಅವರಿಗೆ ಮರಣ
ಶಿಕ್ಷೆಯಾಗಬೇಕು. ಅವರ ಮರಣಕ್ಕೆ ಅವರೇ ಜವಾಬ್ದಾರ
ರಾಗಿದ್ದಾರೆ.

17‘‘ಒಬ್ಬನು ತನ್ನ ಸಹೋದರಿಯನ್ನಾಗಲೀ ತನ್ನ
ತಂದೆಯ ಅಥವಾ ತಾಯಿಯ ಮಗಳನ್ನಾಗಲೀ ಮದುವೆ
ಯಾಗಿ ಲೈಂಗಿಕ ಸಂಬಂಧ ಬೆಳೆಸಿದರೆ, ಅದು ಅವಮಾನ
ಕರವಾದ ಕಾರ್ಯವಾಗಿದೆ! ಅವರಿಗೆ ಬಹಿರಂಗವಾಗಿ ಶಿಕ್ಷೆ
ಯಾಗಬೇಕು. ಅವರನ್ನು ಅವರ ಕುಲದಿಂದ ತೆಗೆದು ಹಾಕ
ಬೇಕು. ತನ್ನ ಸಹೋದರಿಯೊಂದಿಗೆ ಲೈಂಗಿಕ ಸಂಬಂಧ
ಮಾಡಿದ ಪುರುಷನಿಗೆ ಅವನು ಮಾಡಿದ ಪಾಪಕ್ಕಾಗಿ ಶಿಕ್ಷೆ
ಯಾಗಬೇಕು.*

18‘‘ಒಬ್ಬನು ಸ್ತ್ರೀಯನ್ನು ಅವಳ ತಿಂಗಳ ಮುಟ್ಟಿನ
ಸಮಯದಲ್ಲಿ ಸಂಭೋಗ ಮಾಡಿದರೆ, ಅವರಿಬ್ಬರನ್ನೂ
ಕುಲದಿಂದ ತೆಗೆದುಹಾಕಬೇಕು. ಯಾಕಂದರೆ ಅವನು
ಅವಳ ಶೋಣಿತಸ್ಥಾನವನ್ನು ಬಯಲುಪಡಿಸಿದನು;
ಅವಳು ಬಯಲುಪಡಿಸಿಕೊಂಡಳು.

19‘‘ತಾಯಿಯ ಸಹೋದರಿ ಅಥವಾ ತಂದೆಯ
ಸಹೋದರಿಯೊಂದಿಗೆ ಲೈಂಗಿಕ ಸಂಬಂಧ ಮಾಡ
ಬಾರದು. ಅದು ರಕ್ತ ಸಂಬಂಧಿಯೊಡನೆ ಸಂಭೋಗ
ಮಾಡಿದ ಪಾಪವಾಗಿದೆ. ನಿಮ್ಮ ಪಾಪಗಳಿಗಾಗಿ ನಿಮಗೆ ಶಿಕ್ಷೆ
ಯಾಗಬೇಕು. (ಅದಕ್ಕೆ ನೀವಿಬ್ಬರೂ ಜವಾಬ್ದಾರ
ರಾಗಿದ್ದೀರಿ.)

20‘‘ಒಬ್ಬನು ತನ್ನ ದೊಡ್ಡಪ್ಪ ಅಥವಾ ಚಿಕ್ಕಪ್ಪನ ಹೆಂಡತಿ
ಯೊಡನೆ ಮಲಗಿಕೊಳ್ಳಬಾರದು. ಅವರ ಪಾಪಗಳಿಗಾಗಿ
ಅವರಿಬ್ಬರಿಗೂ ಶಿಕ್ಷೆಯಾಗುವುದು. ಅವರು ಮಕ್ಕಳಿಲ್ಲದೆ
ಸಾಯುವರು.*

21‘‘ತನ್ನ ಸಹೋದರನ ಹೆಂಡತಿಯೊಡನೆ ಲೈಂಗಿಕ
ಸಂಬಂಧ ಬೆಳೆಸುವುದು ತಪ್ಪಾಗಿದೆ. ಅವನು ತನ್ನ ಸಹೋದ
ರನಿಗೆ ಅವಮಾನ ಮಾಡಿದವನಾಗಿದ್ದಾನೆ. ಅವರಿಗೆ
ಮಕ್ಕಳಾಗುವುದಿಲ್ಲ.

22‘‘ನೀವು ನನ್ನ ಕಟ್ಟಳೆ ಮತ್ತು ನಿಯಮಗಳನ್ನೆಲ್ಲಾ
ಜ್ಞಾಪಕಮಾಡಬೇಕು. ನೀವು ಅವುಗಳಿಗೆ ವಿಧೇಯರಾಗ
ಬೇಕು. ನಾನು ನಿಮ್ಮನ್ನು ನಿಮ್ಮ ದೇಶಕ್ಕೆ ನಡೆಸುತ್ತಿದ್ದೇನೆ.
ನೀವು ಆ ದೇಶದಲ್ಲಿ ವಾಸಿಸುವಿರಿ. ನೀವು ನನ್ನ ಕಟ್ಟಳೆಗಳಿಗೆ
ಮತ್ತು ನಿಯಮಗಳಿಗೆ ವಿಧೇಯರಾದರೆ, ಆಗ ಆ ದೇಶವು
ನಿಮ್ಮನ್ನು ಕಾರಿಬಿಡುವುದಿಲ್ಲ. 23ಆ ದೇಶವನ್ನು ಬಿಟ್ಟು
ಹೋಗುವಂತೆ ಅಲ್ಲಿಯ ಜನರನ್ನು ನಾನು ಹೊರಡಿಸಿ
ಬಿಡುತ್ತಿದ್ದೇನೆ. ಯಾಕಂದರೆ ಅವರು ಆ ಪಾಪಗಳನ್ನೆಲ್ಲಾ
ಮಾಡಿದರು. ನಾನು ಆ ಪಾಪಗಳನ್ನು ದ್ವೇಷಿಸುತ್ತೇನೆ. ಆದ್ದ
ರಿಂದ ಅವರು ಜೀವಿಸಿದಂತೆ ನೀವು ಜೀವಿಸಬೇಡಿರಿ!
24‘‘ನೀವು ದೇಶವನ್ನು ಪಡೆಯುವಿರಿ ಎಂದು ನಾನು
ನಿಮಗೆ ಹೇಳಿದ್ದೇನೆ. ನಾನು ಅವರ ದೇಶವನ್ನು ನಿಮಗೆ
ಕೊಡುವೆನು. ಅದು ನಿಮ್ಮ ದೇಶವಾಗಿರುವದು. ಅದು
ಅನೇಕ ಒಳ್ಳೆ ಸಂಗತಿಗಳಿಂದ ತುಂಬಿದ ದೇಶವಾಗಿದೆ.*
ನಾನು ನಿಮ್ಮ ದೇವರಾಗಿರುವ ಯೆಹೋವನು!

‘‘ನಾನು ನಿಮ್ಮನ್ನು ನನ್ನ ವಿಶೇಷ ಜನರನ್ನಾಗಿ ಮಾಡಿ
ಕೊಂಡಿದ್ದೇನೆ. ನಾನು ನಿಮ್ಮನ್ನು ಇತರ ಜನರಿಂದ ಆರಿಸಿ
ಕೊಂಡಿದ್ದೇನೆ. 25ಆದ್ದರಿಂದ ಶುದ್ಧವಾದ ಪ್ರಾಣಿಗಳನ್ನು
ಅಶುದ್ಧವಾದ ಪ್ರಾಣಿಗಳಿಗಿಂತ ಭಿನ್ನವಾಗಿ ಕಾಣಬೇಕು.
ನೀವು ಶುದ್ಧವಾದ ಪಕ್ಷಿಗಳನ್ನು ಅಶುದ್ಧವಾದ ಪಕ್ಷಿಗಳಿ
ಗಿಂತ ಭಿನ್ನವಾಗಿ ಕಾಣಬೇಕು. ಆ ಅಶುದ್ಧವಾದ ಪಕ್ಷಿಗ
ಳಲ್ಲಿ, ಪ್ರಾಣಿಗಳಲ್ಲಿ ಮತ್ತು ನೆಲದ ಮೇಲೆ ಹರಿದಾಡುವ
ಪ್ರಾಣಿಗಳಲ್ಲಿ ಯಾವುದನ್ನೂ ತಿನ್ನಬೇಡಿರಿ. ನಾನು ಅವು
ಗಳನ್ನು ಅಶುದ್ಧವಾಗಿ ಮಾಡಿದ್ದೇನೆ. 26ನಾನು ನಿಮ್ಮನ್ನು
ಇತರ ಜನಾಂಗಗಳಿಂದ ಪ್ರತ್ಯೇಕಿಸಿ, ನನ್ನ ವಿಶೇಷ ಜನರ
ನ್ನಾಗಿ ಮಾಡಿದ್ದೇನೆ. ಆದ್ದರಿಂದ ನೀವು ಪರಿಶುದ್ಧರಾಗಿರ
ಬೇಕು. ಯಾಕಂದರೆ, ನಾನು ಯೆಹೋವನು, ಮತ್ತು
ನಾನು ಪರಿಶುದ್ಧನಾಗಿದ್ದೇನೆ. 27ಸತ್ತವರಲ್ಲಿ ವಿಚಾರಿಸುವ
ವರು ಅಥವಾ ಬೇತಾಳಿಕರು, ಪುರುಷರಾಗಲೀ ಸ್ತ್ರೀಯ
ರಾಗಲೀ ಆಗಿದ್ದರೂ, ಅವರಿಗೆ ಮರಣ ಶಿಕ್ಷೆಯಾಗ
ಬೇಕು. ಜನರು ಅವರನ್ನು ಕಲ್ಲೆಸೆದು ಕೊಲ್ಲಬೇಕು. ಅವರ
ಮರಣಕ್ಕೆ ಅವರೇ ಜವಾಬ್ದಾರರಾಗಿದ್ದಾರೆ.

---

**ಅವನು … ಶಿಕ್ಷೆಯಾಗಬೇಕು** ಅಕ್ಷರಶಃ ‘‘ಅವನು ತನ್ನ ದೋಷವನ್ನು ತಾನೇ ಹೊತ್ತುಕೊಂಡು ಹೋಗುವನು.’’

**ಅವರು… ಸಾಯುವರು** ಅಕ್ಷರಶಃ ‘‘ಅವರು ತಮ್ಮ ಬಂಜೆತನವನ್ನು ಹೊರುವರು. ಅವರು ಸಾಯುವರು.’’

**ಅದು … ದೇಶವಾಗಿದೆ** ಅಕ್ಷರಶಃ ‘‘ಹಾಲೂ ಜೇನೂ ಹರಿಯುವ ದೇಶವಾಗಿದೆ.’’

### ಯಾಜಕರು ಅನುಸರಿಸತಕ್ಕ ನಿಯಮಗಳು

21 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
‘‘ಯಾಜಕರಾದ ಆರೋನನ ಮಕ್ಕಳಿಗೆ ಈ
ಸಂಗತಿಗಳನ್ನು ಹೇಳು: ಯಾಜಕರು ಸತ್ತ ವ್ಯಕ್ತಿಯನ್ನು
ಮುಟ್ಟಿ ತನ್ನನ್ನು ಅಶುದ್ಧಮಾಡಿಕೊಳ್ಳಬಾರದು. [2]ಆದರೆ
ಸತ್ತವನು ಅವನ ಹತ್ತಿರದ ಸಂಬಂದಿಕರಲ್ಲಿ ಒಬ್ಬನಾಗಿ
ದ್ದರೆ, ಆಗ ಅವನು ಆ ಹೆಣವನ್ನು ಮುಟ್ಟಬಹುದು. ಸತ್ತ
ವ್ಯಕ್ತಿ ಅವನ ತಾಯಿ, ತಂದೆ, ಮಗ, ಮಗಳು, ಸಹೋದರ
ಅಥವಾ [3]ಮದುವೆಯಾಗದ ಸಹೋದರಿಯಾಗಿದ್ದರೆ, *
(ಈ ಸಹೋದರಿಗೆ ಗಂಡನಿಲ್ಲದಿರುವುದರಿಂದ ಅವಳು
ಅವನಿಗೆ ಹತ್ತಿರದ ಸಂಬಂಧಿಯಾಗಿದ್ದಾಳೆ. ಆದ್ದರಿಂದ
ಯಾಜಕನು ತನ್ನನ್ನು ಅಶುದ್ಧಮಾಡಿಕೊಳ್ಳಬಹುದು.
[4]ಆದರೆ ಸತ್ತವನು ಕೇವಲ ಅವನ ಗುಲಾಮರಲ್ಲಿ ಒಬ್ಬ
ನಾಗಿದ್ದರೆ ಯಾಜಕನು ತನ್ನನ್ನು ಅಶುದ್ಧ ಮಾಡಿಕೊಳ್ಳ
ಬಾರದು. [5]‘‘ಯಾಜಕರು ತಮ್ಮ ತಲೆಗಳನ್ನು ಬೋಳಿಸಿ
ಕೊಳ್ಳಬಾರದು; ತಮ್ಮ ಗಡ್ಡದ ಪಾರ್ಶ್ವಗಳನ್ನು ಕತ್ತರಿಸಿ
ವಿಕಾರಗೊಳಿಸಬಾರದು; ತಮ್ಮ ದೇಹಗಳಲ್ಲಿ ಯಾವ
ಗಾಯ ಮಾಡಿಕೊಳ್ಳಬಾರದು. [6]ಅವರು ತಮ್ಮ ದೇವರಿಗೆ
ಪ್ರತಿಷ್ಠಿತರಾಗಿರಬೇಕು. ಅವರು ದೇವರ ನಾಮಕ್ಕೆ
ಗೌರವ ತೋರಿಸಬೇಕು. ಯಾಕಂದರೆ ಅವರು ಅಗ್ನಿಯ
ಮೂಲಕ ಅರ್ಪಿಸಿದ ರೊಟ್ಟಿಯನ್ನು ಮತ್ತು ಕಾಣಿಕೆಗಳನ್ನು
ಯೆಹೋವನಿಗೆ ತೆಗೆದುಕೊಂಡು ಹೋಗುತ್ತಾರೆ. ಆದ್ದ
ರಿಂದ ಅವರು ಪವಿತ್ರರಾಗಿರಬೇಕು.

[7]‘‘ಯಾಜಕನು ವಿಶೇಷವಾದ ರೀತಿಯಲ್ಲಿ ದೇವರ
ಸೇವೆಮಾಡುತ್ತಾನೆ. ಆದ್ದರಿಂದ ಯಾಜಕನು ಬೇರೆಯವ
ರೊಡನೆ ಲೈಂಗಿಕ ಸಂಬಂಧಮಾಡಿದ ಸ್ತ್ರೀಯನ್ನು ಮದುವೆ
ಯಾಗಬಾರದು. ಯಾಜಕನು ವೇಶ್ಯೆಯನ್ನಾಗಲೀ ಗಂಡ
ಬಿಟ್ಟವನನ್ನಾಗಲೀ ಮದುವೆಯಾಗಬಾರದು. [8]ಯಾಜ
ಕನು ವಿಶೇಷವಾದ ರೀತಿಯಲ್ಲಿ ದೇವರ ಸೇವೆ ಮಾಡು
ತ್ತಾನೆ. ಆದ್ದರಿಂದ ನೀವು ಅವನನ್ನು ವಿಶೇಷವಾದ ರೀತಿ
ಯಲ್ಲಿ ನೋಡಿಕೊಳ್ಳಬೇಕು. ಯಾಕಂದರೆ ಅವನು ಪವಿತ್ರ
ವಸ್ತುಗಳನ್ನು ಸಮರ್ಪಿಸುತ್ತಾನಲ್ಲ! ಅವನು ದೇವರ ಬಳಿಗೆ
ಪವಿತ್ರ ರೊಟ್ಟಿಯನ್ನು ತರುತ್ತಾನೆ. ನಾನೇ ಪರಿಶುದ್ಧನು!
ನಾನೇ ಯೆಹೋವನು! ಮತ್ತು ನಾನು ನಿಮ್ಮನ್ನು ಪರಿಶುದ್ಧ
ಗೊಳಿಸುತ್ತೇನೆ.

[9]‘‘ಯಾಜಕನ ಮಗಳು ವೇಶ್ಯೆಯಾಗಿದ್ದರೆ, ಅವಳು ತನ್ನ
ಗೌರವವನ್ನು ಹಾಳುಮಾಡಿಕೊಂಡವಳೂ ತನ್ನ ತಂದೆಗೆ
ಅವಮಾನವನ್ನು ಉಂಟುಮಾಡಿದವಳೂ ಆಗಿದ್ದಾಳೆ.
ಅವಳನ್ನು ಸುಟ್ಟುಹಾಕಬೇಕು.

[10]‘‘ಪ್ರಧಾನಯಾಜಕನು ಅವನ ಸಹೋದರರೊಳ
ಗಿಂದ ಆರಿಸಲ್ಪಟ್ಟವನಾಗಿದ್ದಾನೆ. ಅಭಿಷೇಕತೈಲವು ಅವನ
ತಲೆಯ ಮೇಲೆ ಹೊಯ್ಯಲ್ಪಟ್ಟಿದೆ. ಈ ರೀತಿಯಾಗಿ ಅವನು
ಪ್ರಧಾನಯಾಜಕನ ವಿಶೇಷ ಕೆಲಸಕ್ಕೆ ಆರಿಸಲ್ಪಟ್ಟಿದ್ದಾನೆ.
ಅವನು ವಿಶೇಷ ಬಟ್ಟೆಗಳನ್ನು ಧರಿಸಿಕೊಳ್ಳಲು ಆರಿಸಲ್ಪ
ಟ್ಟಿದ್ದಾನೆ. (ಆದ್ದರಿಂದ ಅವನು ಬಹಿರಂಗವಾಗಿ ದುಃಖ
ಸೂಚಿಸುವ ಕಾರ್ಯಗಳನ್ನು ಮಾಡಬಾರದು.) ಅವನು
ತನ್ನ ಕೂದಲನ್ನು ಕೆದರಿಕೊಳ್ಳಬಾರದು. ಅವನು ತನ್ನ ಬಟ್ಟೆ
ಗಳನ್ನು ಹರಿದುಕೊಳ್ಳಬಾರದು. [11]ಅವನು ಹೆಣವನ್ನು
ಮುಟ್ಟಿ ತನ್ನನ್ನು ಅಶುದ್ಧನನ್ನಾಗಿ ಮಾಡಿಕೊಳ್ಳಬಾರದು.
ಅದು ಅವನ ತಂದೆಯ ಶವವಾಗಿದ್ದರೂ ಸರಿ, ಅಥವಾ
ತಾಯಿಯ ಶವವಾಗಿದ್ದರೂ ಸರಿ, ಅವನು ಅದರ ಬಳಿಗೆ
ಹೋಗಬಾರದು. [12]ಪ್ರಧಾನಯಾಜಕನು ದೇವರ ಪರಿ
ಶುದ್ಧ ಸ್ಥಳವನ್ನು ಬಿಟ್ಟು ಹೊರಗೆ ಹೋದರೆ ಅಶುದ್ಧ
ನಾಗುವನು. ಅಲ್ಲದೆ ಅವನಿಂದ ದೇವರ ಪರಿಶುದ್ಧಸ್ಥಳವು
ಅಶುದ್ಧವಾಗುವುದು. ಅಭಿಷೇಕತೈಲವು ಮಹಾ
ಯಾಜಕನ ತಲೆಯ ಮೇಲೆ ಹೊಯ್ಯಲ್ಪಟ್ಟಿದೆ. ಇದು
ಅವನನ್ನು ಇತರ ಜನರಿಂದ ಪ್ರತ್ಯೇಕಗೊಳಿಸಿದೆ. ನಾನೇ
ಯೆಹೋವನು!

[13]‘‘ಪ್ರಧಾನಯಾಜಕನು ಕನ್ಯೆಯಾಗಿರುವವಳನ್ನು
ಮದುವೆಯಾಗಬೇಕು. [14]ಪ್ರಧಾನಯಾಜಕನು ಬೇರೆ
ಪುರುಷನೊಡನೆ ಲೈಂಗಿಕ ಸಂಬಂಧ ಮಾಡಿದ ಸ್ತ್ರೀಯನ್ನು
ಮದುವೆಯಾಗಬಾರದು. ಪ್ರಧಾನಯಾಜಕನು ವೇಶ್ಯಾ
ಸ್ತ್ರೀಯನ್ನಾಗಲೀ ಗಂಡ ಬಿಟ್ಟವಳನ್ನಾಗಲೀ ಅಥವಾ
ವಿಧವೆಯನ್ನಾಗಲೀ ಮದುವೆಯಾಗಬಾರದು. ಪ್ರಧಾನ
ಯಾಜಕನು ತನ್ನ ಸ್ವಂತ ಜನರಲ್ಲಿ ಒಬ್ಬ ಕನ್ಯೆಯನ್ನು
ಮದುವೆಯಾಗಬೇಕು. [15]ಹೀಗಾಗಿ ಜನರು ಅವನ ಮಕ್ಕ
ಳಿಗೆ ಗೌರವ ತೋರಿಸುವರು. * ಯೆಹೋವನಾಗಿರುವ
ನಾನು ಪ್ರಧಾನಯಾಜಕನನ್ನು ಅವನ ವಿಶೇಷ ಕೆಲಸಕ್ಕಾಗಿ
ಪ್ರತ್ಯೇಕಿಸಿದ್ದೇನೆ.’’

[16]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[17]‘‘ಆರೋನನಿಗೆ ಹೀಗೆ ಹೇಳು: ನಿನ್ನ ಸಂತತಿಯವರ
ಮಕ್ಕಳಲ್ಲಿ ಯಾರಾದರೂ ಅಂಗವಿಕಲರಾಗಿದ್ದರೆ, ಅವರು
ವಿಶೇಷ ರೊಟ್ಟಿಯನ್ನು ದೇವರ ಬಳಿಗೆ ತೆಗೆದುಕೊಂಡು
ಹೋಗಬಾರದು. [18]ಯಾವ ಅಂಗವಿಕಲನೂ ಯಾಜಕ
ನಾಗಿ ಸೇವೆಮಾಡಬಾರದು; ನನಗೆ ಯಜ್ಞಗಳನ್ನು
ಅರ್ಪಿಸಬಾರದು. ಯಾಜಕರಾಗಿ ಸೇವೆ ಮಾಡ
ಬಾರದವರು ಯಾರೆಂದರೆ:

ಕುರುಡರು ಕುಂಟರು ತಮ್ಮ ಮುಖಗಳಲ್ಲಿ
ಕೆಟ್ಟದಾದ ಗಾಯದ ಗುರುತುಗಳುಳ್ಳವರು ಬಹಳ
ಉದ್ದವಾದ ಕೈಕಾಲುಗಳುಳ್ಳವರು

---

**ಸಹೋದರಿ** ಅಕ್ಷರಶಃ ‘‘ಕನ್ನಿಕೆ.’’

**ಹೀಗಾಗಿ … ತೋರಿಸುವರು** ಅಥವಾ ‘‘ ಅವನ ಮಕ್ಕಳು ಇತರ ಜನರಿಂದ ಅಶುದ್ಧರಾಗುವುದಿಲ್ಲ.’’

19 ಮುರಿದ ಕೈಕಾಲುಗಳುಳ್ಳವರು
20 ಗೂನು ಬೆನ್ನುಳ್ಳವರು ದೇಹ ಬೆಳವಣಿಗೆ ನಿಂತು
ಹೋಗಿರುವವರು ಕಣ್ಣು ದೋಷವುಳ್ಳವರು
ಕಜ್ಜಿತುರಿಗಳುಳ್ಳವರು ಅಥವಾ ಚರ್ಮರೋಗ
ವುಳ್ಳವರು ಬೀಜದೋಷವುಳ್ಳವರು.

21ಆರೋನನ ಸಂತತಿಯವರಲ್ಲಿ ಅಂಗವಿಕಲರಾದ
ಯಾರೂ ಯೆಹೋವನಿಗೆ ಹೋಮದ್ರವ್ಯಗಳನ್ನು ಸಮ
ರ್ಪಿಸಬಾರದು; ಅಂಥವನು ವಿಶೇಷರೊಟ್ಟಿಯನ್ನು
ದೇವರ ಬಳಿಗೆ ತೆಗೆದುಕೊಂಡು ಹೋಗಕೂಡದು.
22ಅವನು ಯಾಜಕರ ಕುಟುಂಬದವನಾಗಿರುವುದರಿಂದ
ಪರಿಶುದ್ಧರೊಟ್ಟಿಯನ್ನೂ ಮಹಾಪರಿಶುದ್ಧ ರೊಟ್ಟಿ
ಯನ್ನೂ ತಿನ್ನಬಹುದು. 23ಆದರೆ ಅವನು ತೆರೆಯ ಬಳಿಗೆ
ಹೋಗಬಾರದು; ಅವನು ಯಜ್ಞವೇದಿಕೆಯ ಬಳಿಗೆ
ಹೋಗಬಾರದು. ಯಾಕಂದರೆ ಅವನು ಅಂಗ ವಿಕಲ
ನಾಗಿದ್ದಾನೆ. ಅವನು ನನ್ನ ಪರಿಶುದ್ಧ ಸ್ಥಳಗಳನ್ನು ಅಶುದ್ಧ
ಗೊಳಿಸಬಾರದು. ಯೆಹೋವನಾದ ನಾನೇ ಆ ಸ್ಥಳ
ಗಳನ್ನು ಪರಿಶುದ್ಧಗೊಳಿಸಿದ್ದೇನೆ.''
24ಹೀಗೆ ಮೋಶೆಯು ಈ ಸಂಗತಿಗಳನ್ನು ಆರೋನ
ನಿಗೂ ಅವನ ಪುತ್ರರಿಗೂ ಮತ್ತು ಇಸ್ರೇಲರೆಲ್ಲರಿಗೂ
ಹೇಳಿದನು.

22 ದೇವರಾದ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ: 2''ಆರೋನನಿಗೂ ಅವನ ಪುತ್ರರಿಗೂ
ಹೀಗೆ ಹೇಳು: ಇಸ್ರೇಲರು ನನಗೆ ಕಾಣಿಕೆಗಳನ್ನು
ಸಮರ್ಪಿಸುವರು. ಅವು ಪರಿಶುದ್ಧವಾದವುಗಳು. ಅವು
ನನ್ನವು. ಆದ್ದರಿಂದ ಯಾಜಕರಾದ ನೀವು ಅವುಗಳನ್ನು
ತೆಗೆದುಕೊಳ್ಳಬಾರದು. ನೀವು ಆ ಪರಿಶುದ್ಧ ವಸ್ತುಗಳನ್ನು
ಉಪಯೋಗಿಸಿದರೆ, ನನ್ನ ಪರಿಶುದ್ಧ ಹೆಸರಿಗೆ ಅವಮಾನ
ವಾಗುವುದು. ನಾನೇ ಯೆಹೋವನು! 3ನಿಮ್ಮ ಸಂತತಿ
ಯವರೆಲ್ಲರಲ್ಲಿ ಯಾವನಾದರೂ ಅಪವಿತ್ರನಾಗಿರುವಾಗ
ಅವುಗಳನ್ನು ಮುಟ್ಟಿದರೆ, ಅವನನ್ನು ನನ್ನ ಸನ್ನಿಧಿ ಸೇವೆ
ಯಿಂದ ತೆಗೆದುಹಾಕಬೇಕು! ಇಸ್ರೇಲರು ಅವುಗಳನ್ನು
ನನಗೆ ಕೊಟ್ಟಿದ್ದಾರೆ. ನಾನೇ ಯೆಹೋವನು!
4''ಆರೋನನ ಸಂತತಿಯವರಲ್ಲಿ ಯಾವನಿಗಾದರೂ
ಕೆಟ್ಟದಾದ ಚರ್ಮರೋಗವಾಗಲೀ ಸ್ರಾವವಾಗಲೀ
ಇದ್ದರೆ, ಅವನು ಶುದ್ಧನಾಗುವವರೆಗೆ ದೇವರಿಗೆ ನೈವೇದ್ಯ
ವಾದ ಪದಾರ್ಥಗಳನ್ನು ತಿನ್ನಬಾರದು. ಅಶುದ್ಧನಾಗುವ
ಪ್ರತಿ ಯಾಜಕನಿಗೂ ಈ ನಿಯಮ ಅನ್ವಯಿಸುತ್ತದೆ. ಆ
ಯಾಜಕನು ಹೆಣವನ್ನು ಮುಟ್ಟಿದರೆ, ವೀರ್ಯಸ್ಖಲನ ಮಾಡಿ
ಕೊಂಡರೆ, 5ಯಾವುದೇ ಅಶುದ್ಧವಾದ ಹರಿದಾಡುವ
ಜಂತುಗಳನ್ನು ಮುಟ್ಟಿದರೆ, ಅಶುದ್ಧನಾದ ವ್ಯಕ್ತಿಯನ್ನು
ಮುಟ್ಟಿದರೆ ಅಶುದ್ಧನಾಗುವನು. ಯಾವುದು ಅವನನ್ನು
ಅಶುದ್ಧಪಡಿಸಿತು ಎಂಬುದು ಪ್ರಾಮುಖ್ಯವಲ್ಲ.
6''ಒಬ್ಬನು ಅವುಗಳಲ್ಲಿ ಯಾವುದನ್ನು ಮುಟ್ಟಿದರೂ
ಸಾಯಂಕಾಲದವರೆಗೆ ಅಶುದ್ಧನಾಗುವನು. ಅವನು
ನೈವೇದ್ಯ ಪದಾರ್ಥಗಳಲ್ಲಿ ಯಾವುದನ್ನೂ ತಿನ್ನಬಾರದು.
ಅವನು ತನ್ನನ್ನು ನೀರಿನಿಂದ ತೊಳೆದುಕೊಂಡರೂ ಪವಿತ್ರ
ಪದಾರ್ಥವನ್ನು ತಿನ್ನಬಾರದು.* 7ಸೂರ್ಯನು ಮುಳು
ಗಿದ ನಂತರವೇ ಅವನು ಶುದ್ಧನಾಗುವನು. ಬಳಿಕ ಅವನು
ನೈವೇದ್ಯ ಪದಾರ್ಥವನ್ನು ತಿನ್ನಬಹುದು. ಯಾಕಂದರೆ ಆ
ಪದಾರ್ಥವು ಅವನ ಪಾಲಾಗುತ್ತದೆ.
8''ಯಾಜಕನು ಸತ್ತ ಪ್ರಾಣಿಯನ್ನಾಗಲೀ ಕ್ರೂರ ಪ್ರಾಣಿ
ಗಳಿಂದ ಕೊಲ್ಲಲ್ಪಟ್ಟ ಪ್ರಾಣಿಯನ್ನಾಗಲೀ ತಿನ್ನಬಾರದು.
ಅವನು ಅದನ್ನು ತಿಂದರೆ ಅಶುದ್ಧನಾಗುವನು. ನಾನೇ
ಯೆಹೋವನು!
9''ಅವರು (ಯಾಜಕರು) ನನ್ನ ಅಗತ್ಯತೆಗಳನ್ನು
ಎಚ್ಚರಿಕೆಯಿಂದ ಪೂರೈಸಿದರೆ ಅಪರಾಧಕ್ಕೆ ಒಳಗಾಗುವು
ದಿಲ್ಲ. ಅವರು ಪವಿತ್ರವಾದವುಗಳನ್ನು ಅಪವಿತ್ರ ಗೊಳಿ
ಸಿದರೆ ಸಾಯುವರು. ಯೆಹೋವನಾದ ನಾನೇ ಅವರನ್ನು
ಪರಿಶುದ್ಧರನ್ನಾಗಿ ಮಾಡಿದ್ದೇನೆ ಮತ್ತು ಈ ವಿಶೇಷ
ಸೇವೆಗಾಗಿ ಪ್ರತ್ಯೇಕಿಸಿದ್ದೇನೆ. 10ಯಾಜಕರ ಕುಟುಂಬದ
ಜನರು ಮಾತ್ರವೇ ನೈವೇದ್ಯ ಪದಾರ್ಥಗಳನ್ನು ತಿನ್ನ
ಬಹುದು. ಯಾಜಕನೊಂದಿಗೆ ಇಳಿದುಕೊಂಡವನಾಗಲೀ
ಕೂಲಿಯಾಳಾಗಲೀ ನೈವೇದ್ಯ ಪದಾರ್ಥಗಳಲ್ಲಿ ಯಾವು
ದನ್ನೂ ತಿನ್ನಬಾರದು. 11ಆದರೆ ಯಾಜಕನು ತನ್ನ ಸ್ವಂತ
ಹಣದಿಂದ ಒಬ್ಬನನ್ನು ಗುಲಾಮನನ್ನಾಗಿ ಕೊಂಡು
ಕೊಂಡರೆ, ಆ ಗುಲಾಮನು ನೈವೇದ್ಯ ಪದಾರ್ಥಗಳಲ್ಲಿ ಕೆಲ
ವನ್ನು ತಿನ್ನಬಹುದು. ಯಾಜಕನ ಮನೆಯಲ್ಲಿ ಹುಟ್ಟಿದ
ಗುಲಾಮರು ಸಹ ಯಾಜಕನ ಆಹಾರದಲ್ಲಿ ಕೆಲವನ್ನು ತಿನ್ನ
ಬಹುದು. 12ಯಾಜಕನ ಮಗಳು ಯಾಜಕನಲ್ಲದವನನ್ನು
ಮದುವೆಯಾದರೆ ಅವಳು ನೈವೇದ್ಯ ಸಮರ್ಪಣೆಗಳಲ್ಲಿ
ಯಾವುದನ್ನೂ ತಿನ್ನಬಾರದು. 13ಯಾಜಕನ ಮಗಳು
ವಿಧವೆಯಾಗಿದ್ದರೆ ಅಥವಾ ಗಂಡ ಬಿಟ್ಟವಳಾಗಿದ್ದರೆ
ಅಲ್ಲದೆ ಅವಳಿಗೆ ಆಧಾರ ನೀಡುವಂಥ ಮಕ್ಕಳೂ ಇಲ್ಲ
ದಿದ್ದರೆ ಮತ್ತು ಅವಳು ತನ್ನ ತಂದೆಯ ಮನೆಗೆ ಹಿಂತಿರುಗಿ
ಹೋದರೆ, ಆಗ ಅವಳು ತಂದೆಯ ಆಹಾರದಲ್ಲಿ ಸ್ವಲ್ಪ ತಿನ್ನ
ಬಹುದು. ಆದರೆ ಯಾಜಕನ ಕುಟುಂಬದವರು
ಮಾತ್ರವೇ ಈ ಆಹಾರವನ್ನು ತಿನ್ನಬಹುದು.
14''ಒಬ್ಬನು ತಿಳಿಯದೆ ನೈವೇದ್ಯ ಪದಾರ್ಥವನ್ನು
ತಿಂದರೆ ಅವನು ಆ ಪದಾರ್ಥವನ್ನೂ ಪದಾರ್ಥದ ಬೆಲೆಯ
ಐದನೆಯ ಒಂದಂಶವನ್ನೂ ಅದಕ್ಕೆ ಸೇರಿಸಿ ಯಾಜಕನಿಗೆ
ಕೊಡಬೇಕು.

---

**ಪವಿತ್ರ … ತಿನ್ನಬಾರದು** ಅಥವಾ '' ಅವನು ತನ್ನನ್ನು ನೀರಿನಿಂದ ತೊಳೆದುಕೊಂಡ ನಂತರ ಪವಿತ್ರ ಆಹಾರವನ್ನು ತಿನ್ನಬಹುದು.''

15‘‘ಇಸ್ರೇಲರು ಯೆಹೋವನಿಗೆ ಕೊಡುವ ಕಾಣಿಕೆಗಳು
ಪರಿಶುದ್ಧವಾಗಿವೆ. ಆದ್ದರಿಂದ ಯಾಜಕರು ಆ ಪರಿಶುದ್ಧ
ವಸ್ತುಗಳನ್ನು ಅಶುದ್ಧಮಾಡಬಾರದು. 16ಯಾಜಕರು
ಅವುಗಳನ್ನು ಪರಿಶುದ್ಧವಾದವುಗಳೆಂದು ಪರಿಗಣಿಸದೆ
ನೈವೇದ್ಯ ಪದಾರ್ಥಗಳನ್ನು ತಿಂದರೆ ಪಾಪಕ್ಕೆ ಒಳಗಾಗು
ವರು. ಯೆಹೋವನಾದ ನಾನೇ ಅವುಗಳನ್ನು ಪವಿತ್ರ
ಗೊಳಿಸಿದ್ದೇನೆ.’’
17ಯೆಹೋವನು ಮೋಶೆಗೆ ಇಂತೆಂದನು:
18‘‘ಆರೋನನಿಗೆ, ಅವನ ಪುತ್ರರಿಗೆ ಮತ್ತು ಇಸ್ರೇಲರೆಲ್ಲ
ರಿಗೆ ಹೀಗೆ ಹೇಳು: ಒಂದುವೇಳೆ ಇಸ್ರೇಲನಾಗಲೀ ಅಥವಾ
ಪರದೇಶಸ್ಥನಾಗಲೀ ಹರಕೆಯಾಗಿ ಅಥವಾ ಕಾಣಿಕೆ
ಯಾಗಿ ಸರ್ವಾಂಗಹೋಮ ಮಾಡುವಾಗ, 19-20ಅದು
ಸ್ವೀಕೃತವಾಗುವಂತೆ ಪೂರ್ಣಾಂಗವಾದ ಹೋರಿಯನ್ನಾ
ಗಲೀ ಟಗರನ್ನಾಗಲೀ ಹೋತವನ್ನಾಗಲೀ ಅರ್ಪಿಸಬೇಕು.
ಅಂಗದೋಷವುಳ್ಳ ಯಾವುದನ್ನೂ ನೀವು ಸಮರ್ಪಿಸ
ಬಾರದು; ಅಂಗದೋಷವುಳ್ಳವುಗಳನ್ನು ನಾನು
ಸ್ವೀಕರಿಸುವುದಿಲ್ಲ.
21‘‘ಒಬ್ಬನು ಸಮಾಧಾನ ಯಜ್ಞವನ್ನು ಹರಕೆಯಾಗಿ
ಅಥವಾ ಕಾಣಿಕೆಯಾಗಿ ಅರ್ಪಿಸುವಾಗ ಹೋರಿಯ
ನ್ನಾಗಲೀ ಟಗರನ್ನಾಗಲೀ ಅರ್ಪಿಸಬೇಕು; ಅದು ಅಂಗ
ದೋಷವಿಲ್ಲದ್ದಾಗಿರಬೇಕು; ಆರೋಗ್ಯವುಳ್ಳದ್ದಾಗಿರ
ಬೇಕು. ಆಗ ಅದು ಸ್ವೀಕೃತವಾಗುವುದು. 22ಕುರುಡಾದದ್ದ
ನ್ನಾಗಲೀ ಮೂಳೆ ಮುರಿದುಕೊಂಡದ್ದನ್ನಾಗಲೀ, ಕುಂಟಾ
ದದ್ದನ್ನಾಗಲೀ, ಸ್ರಾವವುಳ್ಳದ್ದನ್ನಾಗಲೀ ಕೆಟ್ಟದಾದ ಚರ್ಮ
ರೋಗವುಳ್ಳದ್ದನ್ನಾಗಲೀ ನೀವು ಯೆಹೋವನಿಗೆ ಅರ್ಪಿಸ
ಬಾರದು. ಯೆಹೋವನ ಯಜ್ಞವೇದಿಕೆಯ ಬೆಂಕಿಯಲ್ಲಿ
ಅನಾರೋಗ್ಯವಾದ ಪ್ರಾಣಿಗಳನ್ನು ಅರ್ಪಿಸಬಾರದು.
23‘‘ಕಾಲು ಉದ್ದವಾಗಿರುವ ಅಥವಾ ಮೊಂಡಾಗಿರುವ
ಹೋರಿಯನ್ನಾಗಲೀ ಕುರಿಯನ್ನಾಗಲೀ ಒಬ್ಬನು
ಯೆಹೋವನಿಗೆ ಕಾಣಿಕೆಯಾಗಿ ಕೊಡಲು ಬಯಸಿದರೆ,
ಆಗ ಅದು ಸ್ವೀಕೃತವಾಗುವುದು. ಆದರೆ, ಅವನು ಮಾಡಿದ
ವಿಶೇಷ ಹರಕೆಯಾಗಿ ಅದು ಸ್ವೀಕೃತವಾಗುವುದಿಲ್ಲ. ಅದು
ಸ್ವಇಚ್ಛೆಯಿಂದ ಅರ್ಪಿಸಿದ ಕಾಣಿಕೆಯಾಗಿ ಸ್ವೀಕರಿ
ಸಲ್ಪಡುವುದು.
24‘‘ಗಾಯಗೊಂಡ ಅಥವಾ ಬೀಜಹೊಡೆದ ಪಶು
ವನ್ನು ಯೆಹೋವನಿಗೆ ಅರ್ಪಿಸಬಾರದು. ಇದನ್ನು ನಿಮ್ಮ
ಸ್ವಂತನಾಡಿನಲ್ಲಿ ಮಾಡಬಾರದು.
25‘‘ಪರದೇಶಸ್ಥರಿಂದ ಯೆಹೋವನಿಗೆ ಬಲಿಪಶು
ಗಳನ್ನು ತೆಗೆದುಕೊಳ್ಳಬಾರದು. ಯಾಕಂದರೆ ಆ ಪಶು
ಗಳಿಗೆ ಒಂದು ವೇಳೆ ಪೆಟ್ಟಾಗಿರಬಹುದು; ಅವುಗಳಲ್ಲಿ
ಏನಾದರೂ ದೋಷವಿರಬಹುದು. ಅವುಗಳು ಸಮರ್ಪಕ
ವಾಗುವುದಿಲ್ಲ.’’
26ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
27‘‘ಕರುವಾಗಲೀ ಕುರಿಮರಿಯಾಗಲೀ ಅಥವಾ ಆಡಾ
ಗಲೀ ಹುಟ್ಟಿದ ಬಳಿಕ ತನ್ನ ತಾಯಿಯೊಂದಿಗೆ ಏಳು ದಿನ
ಗಳವರೆಗೆ ಇರಲೇಬೇಕು. ಎಂಟನೆಯ ದಿನದಲ್ಲಿ ಮತ್ತು
ಅದರ ನಂತರ, ಆ ಪಶುವು ಸರ್ವಾಂಗಹೋಮಕ್ಕೆ
ಯೋಗ್ಯವಾಗಿರುತ್ತದೆ. 28ಆದರೆ ನೀವು ಆ ಪಶುವನ್ನೂ
ಅದರ ತಾಯಿಯನ್ನೂ ಒಂದೇ ದಿನದಲ್ಲಿ ವಧಿಸಬಾರದು.
ಇದೇ ನಿಯಮ ದನಗಳಿಗೂ ಕುರಿಗಳಿಗೂ
ಅನ್ವಯಿಸುತ್ತದೆ.
29‘‘ಯೆಹೋವನಿಗೆ ವಿಶೇಷ ಕೃತಜ್ಞತಾ ಕಾಣಿಕೆಯನ್ನು
ಅರ್ಪಿಸಲು ಬಯಸಿದರೆ, ಆ ಕಾಣಿಕೆಯನ್ನು ಯೆಹೋವ
ನಿಗೆ ಮೆಚ್ಚಿಕೆಯಾದ ರೀತಿಯಲ್ಲಿ ಅರ್ಪಿಸಬೇಕು. 30ನೀವು
ಇಡೀ ಪಶುವನ್ನು ಅದೇ ದಿನದಲ್ಲಿ ತಿನ್ನಬೇಕು. ಮರುದಿನ
ಮುಂಜಾನೆಯವರೆಗೆ ಮಾಂಸದಲ್ಲಿ ಸ್ವಲ್ಪವನ್ನೂ ಉಳಿಸ
ಬಾರದು. ನಾನೇ ಯೆಹೋವನು!
31‘‘ನನ್ನ ಆಜ್ಞೆಗಳನ್ನು ಜ್ಞಾಪಕಮಾಡಿಕೊಂಡು ಅವು
ಗಳಿಗೆ ವಿಧೇಯರಾಗಿರಿ. ನಾನೇ ಯೆಹೋವನು! 32ನನ್ನ
ಪವಿತ್ರ ನಾಮವನ್ನು ಗೌರವಿಸಬೇಕು. ನಾನು ಇಸ್ರೇಲರಿಗೆ
ಬಹಳ ವಿಶೇಷವಾದವನಾಗಿರಬೇಕು. ಯೆಹೋವನಾದ
ನಾನು ನಿಮ್ಮನ್ನು ನನ್ನ ವಿಶೇಷ ಜನರನ್ನಾಗಿ ಮಾಡಿದ್ದೇನೆ.
33ನಿಮ್ಮ ದೇವರಾಗಿರುವುದಕ್ಕಾಗಿ ನಾನು ನಿಮ್ಮನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದೆನು. ನಾನೇ
ಯೆಹೋವನು!‘‘

## ವಿಶೇಷ ಹಬ್ಬದ ದಿನಗಳು

23 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ಇಸ್ರೇಲರಿಗೆ ಹೀಗೆ ಆಜ್ಞಾಪಿಸು: ಯೆಹೋವ
ನಿಂದ ಆರಿಸಲ್ಪಟ್ಟ ಹಬ್ಬದಿನಗಳಲ್ಲಿ ಪವಿತ್ರ ಸಭೆಕೂಡ
ಬೇಕೆಂಬುದಾಗಿ ಪ್ರಕಟಿಸಬೇಕು. ಇವು ನನ್ನ ವಿಶೇಷ
ಹಬ್ಬದ ದಿನಗಳು.

## ಸಬ್ಬತ್ತು

3‘‘ಆರು ದಿನಗಳಲ್ಲಿ ನೀವು ಕೆಲಸಮಾಡಿರಿ. ಆದರೆ ಏಳ
ನೆಯ ದಿನವು ವಿಶೇಷವಾದ ವಿಶ್ರಾಂತಿ ದಿನವಾದ ಸಬ್ಬತ್ತಾ
ಗಿದೆ. ಆ ದಿನದಲ್ಲಿ ಪವಿತ್ರಸಭೆಕೂಡಬೇಕು. ನೀವು ಯಾವ
ಕೆಲಸವನ್ನೂ ಮಾಡಬಾರದು. ನಿಮ್ಮ ಎಲ್ಲಾ ಮನೆಗಳಲ್ಲಿ
ಅದು ಯೆಹೋವನಿಗೆ ಮೀಸಲಾದ ಸಬ್ಬತ್ತಾಗಿದೆ.

## ಪಸ್ಕಹಬ್ಬ

4‘‘ಇವುಗಳು ಯೆಹೋವನಿಂದ ಆರಿಸಲ್ಪಟ್ಟ ಹಬ್ಬದ
ದಿನಗಳು. ಆ ಕಾಲಗಳಲ್ಲಿ ದೇವಾರಾಧನೆಗಾಗಿ ಸಭೆಕೂಟ
ಗಳು ನಡೆಸಲ್ಪಡಬೇಕು. ನೇಮಕವಾದ ದಿನಗಳಲ್ಲಿ

ಇವುಗಳನ್ನು ಪ್ರಕಟಿಸಬೇಕು. [5]ಯೆಹೋವನ ಪಸ್ಕಹಬ್ಬವು
ಮೊದಲನೆ ತಿಂಗಳ* ಹದಿನಾಲ್ಕನೆಯ ದಿನದ ಸಾಯಂ
ಕಾಲ ಅಂದರೆ ಸೂರ್ಯಸ್ತಮಾನವಾದ ಸಮಯದಲ್ಲಿ
ನಡೆಯತ್ತದೆ.

### ಹುಳಿಯಿಲ್ಲದ ರೊಟ್ಟಿಯ ಹಬ್ಬ

[6]“ಅದೇ ತಿಂಗಳ (ಚೈತ್ರಮಾಸ) ಹದಿನೈದನೆಯ ದಿನ
ದಲ್ಲಿ ಯೆಹೋವನ ಹುಳಿಯಿಲ್ಲದ ರೊಟ್ಟಿಯ ಹಬ್ಬ
ವಿರುತ್ತದೆ. ನೀವು ಹುಳಿಯಿಲ್ಲದ ರೊಟ್ಟಿಯನ್ನು ಏಳು ದಿನ
ಗಳವರೆಗೆ ತಿನ್ನುವಿರಿ. [7]ಈ ಹಬ್ಬದ ದಿನದ ಮೊದಲನೆಯ
ದಿನದಲ್ಲಿ ನೀವು ವಿಶೇಷ ಸಭೆಯಾಗಿ ಸೇರಬೇಕು. ಆ ದಿನ
ದಲ್ಲಿ ಯಾವ ಕೆಲಸವನ್ನೂ ಮಾಡಬಾರದು. [8]ಏಳು ದಿನ
ಗಳವರೆಗೆ ನೀವು ಯೆಹೋವನಿಗೆ ಹೋಮವನ್ನು ಅರ್ಪಿಸ
ಬೇಕು. ಏಳನೆಯ ದಿನದಲ್ಲಿ ನೀವು ಇನ್ನೊಂದು ಭಾರಿ
ವಿಶೇಷ ಸಭೆಯಾಗಿ ಸೇರಬೇಕು. ನೀವು ಆ ದಿನದಲ್ಲಿ
ಯಾವ ಕೆಲಸವನ್ನೂ ಮಾಡಬಾರದು.”

### ಪ್ರಥಮ ಬೆಳೆಗಳ ಹಬ್ಬ

[9]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[10]“ಇಸ್ರೇಲರಿಗೆ ಹೀಗೆ ಹೇಳು: ನಾನು ನಿಮಗೆ ಕೊಡುವ
ದೇಶದಲ್ಲಿ ನೀವು ನೆಲೆಸಿದ ನಂತರ ಅಲ್ಲಿ ಬೆಳೆಯನ್ನು
ಕೊಯ್ಯುವಿರಿ. ಆ ಸಮಯದಲ್ಲಿ ನಿಮ್ಮ ಬೆಳೆಯ ಪ್ರಥಮ
ಸಿವುಡನ್ನು ಯಾಜಕನ ಬಳಿಗೆ ತರಬೇಕು. [11]ಯಾಜಕನು
ಸಿವುಡನ್ನು ಯೆಹೋವನ ಸನ್ನಿಧಿಯಲ್ಲಿ ನಿವಾಳಿಸುವನು.
ಆಗ ನೀವು ಸ್ವೀಕೃತರಾಗಲು ಯೋಗ್ಯರಾಗುವಿರಿ. ಸಬ್ಬ
ತ್ತಾದ ನಂತರ (ಭಾನುವಾರ ಬೆಳಿಗ್ಗೆ) ಯಾಜಕನು
ಸಿವುಡನ್ನು ಯೆಹೋವನಿಗೆ ನಿವಾಳಿಸುವನು.

[12]“ನೀವು ಸಿವುಡನ್ನು ನಿವಾಳಿಸುವ ದಿನದಲ್ಲಿ ಒಂದು
ವರ್ಷದ ಗಂಡುಕುರಿಮರಿಯನ್ನು ಅರ್ಪಿಸಬೇಕು. ಆ ಕುರಿ
ಮರಿಯಲ್ಲಿ ಯಾವ ದೋಷವೂ ಇರಬಾರದು. ಅದು
ಯೆಹೋವನಿಗೆ ಸರ್ವಾಂಗಹೋಮವಾಗಿ ಅರ್ಪಿತವಾಗು
ವುದಕ್ಕಾಗಿ ನೇಮಿತವಾಗಿರುವುದು. [13]ನೀವು ಎಣ್ಣೆ ಬೆರೆ
ಸಿದ ಹದಿನಾರು ಬಟ್ಟಲು* ಶ್ರೇಷ್ಠ ಗೋಧಿಹಿಟ್ಟನ್ನು
ಧಾನ್ಯಸಮರ್ಪಣೆಗಾಗಿ ಅರ್ಪಿಸಬೇಕು. ನೀವು ಕಾಲು
ಭಾಗ* ದ್ರಾಕ್ಷಾರಸವನ್ನು ಅರ್ಪಿಸಬೇಕು. ಆ ಯಜ್ಞದ
ಸುವಾಸನೆಯು ಯೆಹೋವನಿಗೆ ಮೆಚ್ಚಿಕೆಯಾಗಿರುತ್ತದೆ.
[14]ನೀವು ಯಾವ ಹೊಸ ಧಾನ್ಯವನ್ನಾಗಲೀ ಹಣ್ಣನ್ನಾಗಲೀ
ಹೊಸ ಧಾನ್ಯದಿಂದ ಮಾಡಿದ ರೊಟ್ಟಿಯನ್ನಾಗಲೀ ದೇವ
ರಿಗೆ ಅರ್ಪಿಸುವ ಮೊದಲು ತಿನ್ನಬಾರದು. ಈ ನಿಯಮವು
ನಿಮ್ಮ ಎಲ್ಲಾ ಸಂತತಿಯವರಿಗೂ ನಿಮ್ಮ ಎಲ್ಲಾ ನಿವಾಸ
ಸ್ಥಾನಗಳಲ್ಲಿಯೂ ಶಾಶ್ವತವಾಗಿದೆ.

### ಪಂಚಾಶತ್ತಮ ಹಬ್ಬ

[15]“ಆ ಭಾನುವಾರ ಬೆಳಿಗ್ಗೆ (ನೈವೇದ್ಯವಾಗಿ ನಿವಾಳಿಸು
ವುದಕ್ಕಾಗಿ ಸಿವುಡನ್ನು ತಂದ ದಿನದಿಂದ) ಹಿಡಿದು ಏಳು
ವಾರಗಳನ್ನು ಲೆಕ್ಕಿಸಿರಿ. [16]ಏಳು ವಾರಗಳು ಮುಗಿದ ಭಾನು
ವಾರ (ಅಂದರೆ ಐವತ್ತು ದಿನಗಳ ನಂತರ) ನೀವು
ಯೆಹೋವನಿಗೆ ಹೊಸಬೆಳೆಯನ್ನು ಸಮರ್ಪಿಸುವಿರಿ. [17]ಆ
ದಿನದಲ್ಲಿ ನಿಮ್ಮ ಮನೆಗಳಿಂದ ಎರಡು ರೊಟ್ಟಿಗಳನ್ನು
ತನ್ನಿರಿ. ಆ ರೊಟ್ಟಿಗಳು ನೈವೇದ್ಯವಾಗಿ ನಿವಾಳಿಸಲ್ಪಡುವು
ದಕ್ಕಾಗಿದೆಯಷ್ಟೇ. ಹುಳಿಯನ್ನು ಉಪಯೋಗಿಸಿ ಹದಿ
ನಾರು ಬಟ್ಟಲು* ಗೋಧಿಹಿಟ್ಟನಿಂದ ಎರಡು ರೊಟ್ಟಿ
ಗಳನ್ನು ಮಾಡಿರಿ. ಅದು ನಿಮ್ಮ ಪ್ರಥಮ ಬೆಳೆಯಿಂದ
ಯೆಹೋವನಿಗೆ ಸಮರ್ಪಿಸುವ ಕಾಣಿಕೆಯಾಗಿರುವುದು.

[18]“ಜನರು ಸಮರ್ಪಿಸುವ ರೊಟ್ಟಿ, ಧಾನ್ಯ ಮತ್ತು
ದ್ರಾಕ್ಷಾರಸಗಳೊಂದಿಗೆ ಒಂದು ಹೋರಿ, ಎರಡು ಟಗರು
ಮತ್ತು ಒಂದು ವರ್ಷದ ಏಳು ಕುರಿಮರಿಗಳನ್ನು ಅರ್ಪಿಸ
ಲಾಗುವುದು. ಆ ಪಶುಗಳಲ್ಲಿ ಯಾವ ದೋಷವು ಇರ
ಬಾರದು. ಅವುಗಳು ಯೆಹೋವನಿಗೆ ಅಗ್ನಿಯ ಮೂಲಕ
ಅರ್ಪಿತವಾಗಲಿರುವ ಸಮರ್ಪಣೆಗಳಾಗಿವೆ. ಅದರ
ಸುವಾಸನೆಯು ಯೆಹೋವನಿಗೆ ಮೆಚ್ಚಿಕೆಯಾಗಿದೆ.
[19]ನೀವು ಪಾಪರಿಹಾರಕದ ಸಮರ್ಪಣೆಯಾಗಿ ಒಂದು
ಹೋತವನ್ನೂ ಸಮಾಧಾನಯಜ್ಞವಾಗಿ ಒಂದು ವರ್ಷದ
ಎರಡು ಮರಿಟಗರುಗಳನ್ನೂ ಅರ್ಪಿಸಬೇಕು.

[20]“ಯಾಜಕನು ಅವುಗಳನ್ನು ಪ್ರಥಮ ಬೆಳೆಯಿಂದ
ಮಾಡಿದ ರೊಟ್ಟಿಯೊಂದಿಗೆ ನೈವೇದ್ಯವಾಗಿ ಎರಡು ಕುರಿ
ಮರಿಗಳೊಂದಿಗೆ ಯೆಹೋವನ ಸನ್ನಿಧಿಯಲ್ಲಿ ನಿವಾಳಿಸು
ವನು. ಅವು ಯೆಹೋವನಿಗೆ ಪವಿತ್ರವಾಗಿರುತ್ತವೆ. ಅವು
ಯಾಜಕರಿಗೆ ಸಲ್ಲುತ್ತವೆ. [21]ಅದೇ ದಿನದಲ್ಲಿ ನೀವು ಪವಿತ್ರ
ಸಭೆಯಾಗಿ ಕೂಡಬೇಕು. ನೀವು ಯಾವ ಕೆಲಸವನ್ನು
ಮಾಡಬಾರದು. ನಿಮ್ಮ ಎಲ್ಲಾ ಮನೆಗಳಲ್ಲಿ ಈ
ನಿಯಮವು ಶಾಶ್ವತವಾಗಿರುವುದು.

[22]“ಅಲ್ಲದೆ ನಿಮ್ಮ ದೇಶದಲ್ಲಿ ಪೈರುಗಳನ್ನು ಕೊಯ್ಯು
ವಾಗ ಹೊಲದ ಮೂಲೆಗಳವರೆಗೆ ಇರುವುದನ್ನೆಲ್ಲಾ
ಕೊಯ್ಯಬೇಡಿರಿ. ನೆಲದ ಮೇಲೆ ಬೀಳುವ ಧಾನ್ಯಗಳನ್ನು
ಹಕ್ಕಲಾಯಬಾರದು. ಬಡವರಿಗಾಗಿಯೂ ನಿಮ್ಮ ದೇಶದ
ಮೂಲಕ ಪ್ರಯಾಣಮಾಡುವ ಪರದೇಶಸ್ಥರಿಗಾಗಿಯೂ
ಅವುಗಳನ್ನು ಬಿಡಿರಿ. ನಾನೇ ನಿಮ್ಮ ದೇವರಾದ
ಯೆಹೋವನು.”

---

**ಮೊದಲನೆ ತಿಂಗಳು** ನಿಶಾನ್; ಯೆಹೂದ್ಯರ ಕ್ಯಾಲೆಂಡರಿನ ಪ್ರಕಾರ ಮೊದಲನೆ ತಿಂಗಳು. ಇದು ಮಾರ್ಚ್-ಎಪ್ರಿಲ್ ತಿಂಗಳಲ್ಲಿ ಬರುತ್ತದೆ.

**ಹದಿನಾರು ಬಟ್ಟಲು** ಅಕ್ಷರಶಃ “2/10 ಏಫಾ.”

**ಕಾಲುಭಾಗ** ಅಕ್ಷರಶಃ “1/4 ಹಿನ್.”

**ಹದಿನಾರು ಬಟ್ಟಲು** ಅಕ್ಷರಶಃ “2/10 ಏಫಾ.”

### ತುತ್ತೂರಿಗಳ ಹಬ್ಬ

23ಯೆಹೋವನು ತಿರುಗಿ ಮೋಶೆಗೆ ಹೇಳಿದ್ದೇನೆಂದರೆ:
24“ಇಸ್ರೇಲರಿಗೆ ಹೀಗೆ ಹೇಳು: ಏಳನೆಯ ತಿಂಗಳಿನ
ಮೊದಲಿನ ದಿನವು ನಿಮಗೆ ವಿಶ್ರಾಂತಿಯ ವಿಶೇಷ ದಿನ
ವಾಗಿರಬೇಕು. ಆಗ ನೀವು ಪವಿತ್ರ ಸಭೆಯಾಗಿ ಸೇರ
ಬೇಕು. ಜ್ಞಾಪಕಮಾಡುವ ವಿಶೇಷ ಸಮಯಕ್ಕಾಗಿ ನೀವು
ತುತ್ತೂರಿಯನ್ನು ಊದಿಸಬೇಕು. 25ನೀವು ಯಾವ ಕೆಲಸ
ವನ್ನೂ ಮಾಡಬಾರದು. ನೀವು ಅಗ್ನಿಯ ಮೂಲಕ
ಯೆಹೋವನಿಗೆ ಸಮರ್ಪಣೆಯನ್ನು ಸಲ್ಲಿಸುವಿರಿ.”

### ದೋಷಪರಿಹಾರಕ ದಿನ

26ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
27“ಏಳನೆಯ ತಿಂಗಳಿನ ಹತ್ತನೆಯ ದಿನವು ದೋಷ
ಪರಿಹಾರಕ ದಿನವಾಗಿರುವುದು. ಆಗ ಪವಿತ್ರ ಸಭೆಯಾಗಿ
ಸೇರಬೇಕು. ನೀವು ಆಹಾರವನ್ನು ತಿನ್ನಬಾರದು.* ನೀವು
ಅಗ್ನಿಯ ಮೂಲಕ ಯೆಹೋವನಿಗೆ ಕಾಣಿಕೆಯನ್ನು ಸಲ್ಲಿಸ
ಬೇಕು. 28ನೀವು ಆ ದಿನದಲ್ಲಿ ಯಾವ ಕೆಲಸವನ್ನೂ ಮಾಡ
ಬಾರದು. ಯಾಕಂದರೆ ಅದು ದೋಷಪರಿಹಾರಕ ದಿನ
ವಾಗಿರುತ್ತದೆ. ಆ ದಿನದಲ್ಲಿ ಯಾಜಕರು ಯೆಹೋವನ
ಸನ್ನಿಧಿಗೆ ಹೋಗಿ ಆಚಾರವಿಧಿಗಳ ಪ್ರಕಾರ ನಿಮಗಾಗಿ
ಪ್ರಾಯಶ್ಚಿತ್ತ ಮಾಡುವರು.

29 “ಈ ದಿನದಲ್ಲಿ ಯಾವನಾದರೂ ಉಪವಾಸ ಮಾಡ
ದಿದ್ದರೆ ಅವನನ್ನು ಅವನ ಕುಲದಿಂದ ತೆಗೆದುಹಾಕಬೇಕು.
30ಈ ದಿನದಲ್ಲಿ ಕೆಲಸಮಾಡುವವನನ್ನು ಇಸ್ರೇಲ
ರೊಂದಿಗೆ ಇರದಂತೆ ನಾಶಮಾಡುವೆನು. 31ನೀವು ಅಂದು
ಯಾವ ಕೆಲಸವನ್ನೂ ಮಾಡಬಾರದು. ನೀವು ಎಲ್ಲೇ ವಾಸ
ವಾಗಿದ್ದರೂ ಈ ಕಟ್ಟಳೆ ನಿಮಗೆ ಶಾಶ್ವತವಾಗಿದೆ. 32ಅದು
ನಿಮಗಾಗಿ ವಿಶ್ರಾಂತಿಯ ವಿಶೇಷ ದಿನವಾಗಿರುವುದು.
ನೀವು ಆಹಾರವನ್ನು ತಿನ್ನಬಾರದು.* ತಿಂಗಳಿನ ಒಂಭತ್ತ
ನೆಯ ದಿನದ ನಂತರ* ಸಾಯಂಕಾಲದಲ್ಲಿ ಈ
ವಿಶ್ರಾಂತಿಯ ವಿಶೇಷ ದಿನವನ್ನು ಪ್ರಾರಂಭಿಸುವಿರಿ. ಈ
ವಿಶ್ರಾಂತಿಯ ವಿಶೇಷ ದಿನವು ಆ ಸಾಯಂಕಾಲದಿಂದ
ಹಿಡಿದು ಮರುದಿನ ಸಾಯಂಕಾಲದವರೆಗೆ ಮುಂದು
ವರಿಯುವುದು.”

### ಪರ್ಣಶಾಲೆಗಳ ಹಬ್ಬ

33“ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
34“ಇಸ್ರೇಲರಿಗೆ ಹೀಗೆ ಹೇಳು: ಏಳನೆಯ ತಿಂಗಳಿನ ಹದಿ
ನೈದನೆಯ ದಿನವು ಪರ್ಣಶಾಲೆಗಳ ಹಬ್ಬವಾಗಿರುತ್ತದೆ.
ಯೆಹೋವನ ಈ ಹಬ್ಬದ ಕಾಲವು ಏಳು ದಿನಗಳವರೆಗೆ
ಮುಂದುವರಿಯುವುದು. 35ಮೊದಲನೆಯ ದಿನದಲ್ಲಿ
ಪವಿತ್ರಸಭೆಯಾಗಿ ಸೇರಬೇಕು. ಅಂದು ನೀವು ಯಾವ
ಕೆಲಸವನ್ನೂ ಮಾಡಬಾರದು. 36ನೀವು ಏಳು ದಿನಗಳ
ವರೆಗೆ ಅಗ್ನಿಯ ಮೂಲಕ ಯೆಹೋವನಿಗೆ ಯಜ್ಞವನ್ನು
ಅರ್ಪಿಸಬೇಕು. ಎಂಟನೆಯ ದಿನದಲ್ಲಿ ಇನ್ನೊಂದು ಬಾರಿ
ಸಭೆಯಾಗಿ ಸೇರಬೇಕು. ನೀವು ಅಗ್ನಿಯ ಮೂಲಕ ಯಜ್ಞ
ವನ್ನು ಅರ್ಪಿಸಬೇಕು. ಇದು ಪವಿತ್ರಸಭೆಯಾಗಿರುವುದು.
ಅಂದು ನೀವು ಯಾವ ಕೆಲಸವನ್ನೂ ಮಾಡಬಾರದು.

37“ಯೆಹೋವನಿಗೆ ವಿಶೇಷ ಹಬ್ಬದ ದಿನಗಳು ಇವು
ಗಳೇ. ಈ ವಿಶೇಷ ದಿನಗಳಲ್ಲಿ ನೀವು ಪವಿತ್ರ ಸಭೆಯಾಗಿ
ಸೇರಬೇಕು. ನೀವು ಅಗ್ನಿಯ ಮೂಲಕ ಯೆಹೋವನಿಗೆ
ಸಮರ್ಪಣೆಯಾಗುವ ಸರ್ವಾಂಗ ಹೋಮ, ಧಾನ್ಯಸಮ
ರ್ಪಣೆ, ಯಜ್ಞಗಳು ಮತ್ತು ಪಾನದ್ರವ್ಯಗಳನ್ನು ಅರ್ಪಿಸ
ಬೇಕು. ನೀವು ಆ ಕಾಣಿಕೆಗಳನ್ನು ಸರಿಯಾದ ಸಮಯ
ದಲ್ಲಿ ಅರ್ಪಿಸಬೇಕು. 38ಯೆಹೋವನನ್ನು ಜ್ಞಾಪಕ
ಮಾಡುವ ಸಬ್ಬತ್ ದಿನಗಳ ಜೊತೆಗೆ ನೀವು ಆ ಹಬ್ಬದ
ದಿನಗಳನ್ನು ಆಚರಿಸಬೇಕು. ನೀವು ಆ ಕಾಣಿಕೆಗಳನ್ನು
ನಿಮ್ಮ ಇತರ ಕಾಣಿಕೆಗಳ ಜೊತೆಗೆ ಅರ್ಪಿಸಬೇಕು. ನೀವು
ಮಾಡಿದ ಹರಕೆಗಳನ್ನು (ವಿಶೇಷ ವಾಗ್ದಾನಗಳು) ನೆರ
ವೇರಿಸುವುದಕ್ಕಾಗಿ ಯೆಹೋವನಿಗೆ ಅರ್ಪಿಸುವ ಕಾಣಿಕೆ
ಗಳ ಜೊತೆಗೆ ಅವುಗಳನ್ನು ಅರ್ಪಿಸಬೇಕು. ನೀವು
ಯೆಹೋವನಿಗೆ ಅರ್ಪಿಸುವ ಯಾವುದೇ ವಿಶೇಷ ಸಮ
ರ್ಪಣೆಗಳೊಂದಿಗೆ ಅವುಗಳನ್ನು ಸಮರ್ಪಿಸಬೇಕು.

39“ಏಳನೆಯ ತಿಂಗಳಿನ ಹದಿನೈದನೆಯ ದಿನದಲ್ಲಿ
ನೀವು ನಿಮ್ಮ ದೇಶದಲ್ಲಿ ಪೈರುಗಳನ್ನು ಸಂಗ್ರಹಿಸಿದ
ನಂತರ, ಏಳು ದಿನಗಳವರೆಗೆ ನೀವು ಯೆಹೋವನ ಹಬ್ಬ
ವನ್ನು ಆಚರಿಸಬೇಕು. ನೀವು ಮೊದಲನೆಯ ಮತ್ತು
ಎಂಟನೆಯ ದಿನದಲ್ಲಿ ವಿಶ್ರಮಿಸಬೇಕು. 40ಪ್ರಥಮ
ದಿನದಲ್ಲಿ ನೀವು ಮರಗಳಿಂದ ಉತ್ತಮ ಹಣ್ಣನ್ನೂ
ಖರ್ಜೂರ ಮರದ ಗರಿಗಳನ್ನೂ ಎಲೆತುಂಬಿದ ಕೊಂಬೆ
ಗಳನ್ನೂ ವಿಲೋ ಸಸ್ಯಗಳನ್ನು ತೆಗೆದುಕೊಳ್ಳಬೇಕು. ನಿಮ್ಮ
ದೇವರಾದ ಯೆಹೋವನ ಸನ್ನಿಧಿಯಲ್ಲಿ ಈ ಹಬ್ಬದ ದಿನ
ವನ್ನು ಏಳು ದಿನಗಳವರೆಗೆ ಆಚರಿಸಬೇಕು. 41ನೀವು ಪ್ರತಿ
ವರ್ಷ ಏಳು ದಿನಗಳವರೆಗೆ ಈ ಹಬ್ಬದ ದಿನವನ್ನು ಆಚರಿಸ
ಬೇಕು. ಈ ನಿಯಮ ಶಾಶ್ವತವಾಗಿದೆ. ಏಳನೆಯ ತಿಂಗಳಲ್ಲಿ
ಈ ಹಬ್ಬದ ದಿನವನ್ನು ನೀವು ಆಚರಿಸಬೇಕು. 42ನೀವು
ಏಳು ದಿನಗಳವರೆಗೆ ತಾತ್ಕಾಲಿಕವಾದ ಆಶ್ರಯ ಗುಡಾರ
ಗಳಲ್ಲಿ ವಾಸಿಸಬೇಕು. ಇಸ್ರೇಲರಲ್ಲಿ ಹುಟ್ಟಿದವರೆಲ್ಲರೂ
ಆ ಗುಡಾರಗಳಲ್ಲಿ ವಾಸಿಸುವರು. 43ನಾನು ಇಸ್ರೇಲರನ್ನು
ಈಜಿಪ್ಟಿನಿಂದ ಹೊರಗೆ ಕರೆದುತಂದಾಗ, ತಾತ್ಕಾಲಿಕವಾದ

---

**ನೀವು ... ತಿನ್ನಬಾರದು** ಅಕ್ಷರಶಃ “ನಿಮ್ಮನ್ನು ದೀನರನ್ನಾಗಿ ಮಾಡಿಕೊಳ್ಳಬೇಕು.”

**ನೀವು ... ತಿನ್ನಬಾರದು** ಅಕ್ಷರಶಃ “ನಿಮ್ಮನ್ನು ದೀನರನ್ನಾಗಿ ಮಾಡಿಕೊಳ್ಳಬೇಕು.”

**ತಿಂಗಳಿನ ಒಂಭತ್ತನೆಯ ದಿನದ ನಂತರ** ಯೆಹೂದ್ಯರ ಕಾಲಮಾನದ ಪ್ರಕಾರ ಸೂರ್ಯಾಸ್ತಮವಾಗುವಾಗ ದಿನ ಆರಂಭಗೊಳ್ಳುತ್ತದೆ.

ಈ ಗುಡಾರಗಳಲ್ಲಿ ವಾಸಿಸುವಂತೆ ಮಾಡಿದವನು ನಾನೇ
ಎಂದು ನಿಮ್ಮ ಸಂತತಿಯವರು ತಿಳಿದುಕೊಳ್ಳುವರು.
ನಾನೇ ನಿಮ್ಮ ದೇವರಾದ ಯೆಹೋವನು!''
44 ಆದ್ದರಿಂದ ಮೋಶೆಯು ಯೆಹೋವನನ್ನು ಸನ್ಮಾನಿ
ಸುವುದಕ್ಕಾಗಿ ಸೇರಿಬರುವ ವಿಶೇಷ ಸಭೆಗಳ ಕುರಿತು
ಜನರಿಗೆ ಹೇಳಿದನು.

## ದೀಪಸ್ತಂಭ ಮತ್ತು ಪವಿತ್ರ ರೊಟ್ಟಿ

24 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ :
2 ''ಎಣ್ಣೆ ಮರದ ಕಾಯಿಗಳನ್ನು ಕುಟ್ಟಿ ತೆಗೆದ
ಶುದ್ಧವಾದ ಎಣ್ಣೆಯನ್ನು ಇಸ್ರೇಲರು ನಿನ್ನ ಬಳಿಗೆ ತರ
ಬೇಕೆಂದು ಆಜ್ಞಾಪಿಸು. ದೇವದರ್ಶನಗುಡಾರದಲ್ಲಿರುವ
ದೀಪಗಳನ್ನು ಉರಿಸಲು ಆ ಎಣ್ಣೆ ಬೇಕಾಗಿರುತ್ತದೆ. ಆ
ದೀಪಗಳು ಆರಿಹೋಗದೆ ಉರಿಯುತ್ತಲೇ ಇರಬೇಕು.
3 ದೇವದರ್ಶನಗುಡಾರದಲ್ಲಿ ಯೆಹೋವನ ಸನ್ನಿಧಿಯಲ್ಲಿ
ಸಾಯಂಕಾಲದಿಂದ ಉದಯದವರೆಗೆ ದೀಪಗಳು ಉರಿ
ಯುತ್ತಿರುವಂತೆ ಆರೋನನು ಅವುಗಳನ್ನು ಸರಿಪಡಿಸು
ವನು. ಇದು ತೆರೆಯ ಹೊರಗೆ ಒಡಂಬಡಿಕೆಯ ಪೆಟ್ಟಿಗೆಯ
ಮುಂದೆ ಇರುವುದು. ಈ ನಿಯಮ ಶಾಶ್ವತವಾದದ್ದು.
4 ಶುದ್ಧ ಚಿನ್ನದಿಂದ ಮಾಡಿದ ದೀಪಸ್ತಂಭದಲ್ಲಿ ದೀಪಗಳು
ಯೆಹೋವನ ಸನ್ನಿಧಿಯಲ್ಲಿ ಯಾವಾಗಲೂ ಉರಿಯು
ತ್ತಿರುವಂತೆ ಆರೋನನು ನೋಡಿಕೊಳ್ಳಬೇಕು.
5 ''ಶ್ರೇಷ್ಠ ಗೋಧಿಹಿಟ್ಟನ್ನು ತೆಗೆದುಕೊಂಡು ಹನ್ನೆರಡು
ರೊಟ್ಟಿಗಳನ್ನು ಮಾಡಬೇಕು. ಪ್ರತಿ ರೊಟ್ಟಿಯನ್ನು
ಮಾಡಲು ಆರು ಸೇರು ಹಿಟ್ಟನ್ನು ಉಪಯೋಗಿಸಬೇಕು.
6 ಅವುಗಳನ್ನು ಯೆಹೋವನ ಸನ್ನಿಧಿಯಲ್ಲಿರುವ ಚಿನ್ನದ
ಮೇಜಿನ ಮೇಲೆ ಎರಡು ಸಾಲಾಗಿ ಇಡಬೇಕು.
ಒಂದೊಂದು ಸಾಲಿನಲ್ಲಿ ಆರಾರು ರೊಟ್ಟಿಗಳಿರುವವು.
7 ಪ್ರತಿ ಸಾಲಿನಲ್ಲಿ ಶುದ್ಧವಾದ ಧೂಪದ್ರವ್ಯವನ್ನಿಡಬೇಕು.
ಇದು ಅಗ್ನಿಯ ಮೂಲಕ ಯೆಹೋವನಿಗೆ ಅರ್ಪಿತವಾದ
ಸಮರ್ಪಣೆಯನ್ನು ಯೆಹೋವನ ಜ್ಞಾಪಕಕ್ಕೆ ತರುವುದು.
8 ಪ್ರತಿ ಸಬ್ಬತ್‌ದಿನದಲ್ಲಿ ಆರೋನನು ಯೆಹೋವನ
ಸನ್ನಿಧಿಯಲ್ಲಿ ರೊಟ್ಟಿಯನ್ನು ಕ್ರಮವಾಗಿ ಯಾವಾಗಲೂ
ಇಡಬೇಕು. ಇಸ್ರೇಲರೊಂದಿಗೆ ಮಾಡಲ್ಪಟ್ಟ ಒಡಂಬಡಿ
ಕೆಯು ಶಾಶ್ವತವಾದದ್ದು. 9 ಆ ರೊಟ್ಟಿಯು ಆರೋನನಿಗೆ
ಮತ್ತು ಅವನ ಪುತ್ರರಿಗೆ ಸಲ್ಲತಕ್ಕದು. ಅವರು ರೊಟ್ಟಿ
ಯನ್ನು ಪವಿತ್ರ ಸ್ಥಳದಲ್ಲಿ ತಿನ್ನುವರು. ಯಾಕಂದರೆ ಅದು
ಮಹಾಪವಿತ್ರವಾದದ್ದು. ಅದು ಅಗ್ನಿಯ ಮೂಲಕ ಅರ್ಪಿ
ಸಿದ ಯಜ್ಞಗಳಲ್ಲಿ ಒಂದಾಗಿದೆ. ಆ ರೊಟ್ಟಿಯು ಶಾಶ್ವತ
ವಾಗಿ ಆರೋನನಿಗೆ ಸಲ್ಲತಕ್ಕದ್ದು.''

## ದೇವರನ್ನು ಶಪಿಸಿದ ಮನುಷ್ಯನು

10 ಇಸ್ರೇಲಿನ ಒಂದು ಸ್ತ್ರೀಗೆ ಒಬ್ಬ ಮಗನಿದ್ದನು. ಅವನ
ತಂದೆ ಈಜಿಪ್ಟಿನವನು. ಪಾಳೆಯದಲ್ಲಿದ್ದ ಇಸ್ರೇಲರ ಮಧ್ಯ
ದಿಂದ ಅವನು (ತನ್ನ ಗುಡಾರದಿಂದ) ಹೊರಬಂದನು.
ಅವನು ಒಬ್ಬ ಇಸ್ರೇಲನೊಡನೆ ಜಗಳವಾಡತೊಡಗಿದನು.
11 ಅವನು ದೂಷಿಸಲು ಪ್ರಾರಂಭಿಸಿ ಯೆಹೋವನ
ನಾಮದ ಬಗ್ಗೆ ಕೆಟ್ಟಮಾತುಗಳನ್ನು ಹೇಳತೊಡಗಿದನು.
ಆದ್ದರಿಂದ ಜನರು ಅವನನ್ನು ಮೋಶೆಯ ಬಳಿಗೆ ಹಿಡಿದು
ತಂದರು. (ಆ ಮನುಷ್ಯನ ತಾಯಿಯ ಹೆಸರು ಶೆಲೋ
ಮೀತ್. ಅವಳು ದಾನ್ ಕುಲದವನಾದ ದಿಬ್ರೀಯ
ಮಗಳು.) 12 ಜನರು ಅವನನ್ನು ಸೆರೆಹಿಡಿದು,
ಯೆಹೋವನ ಸ್ಪಷ್ಟವಾದ ಆಜ್ಞೆಗಾಗಿ ಕಾದುಕೊಂಡಿದ್ದರು.
13 ಆಗ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
14 ''ದೂಷಣೆ ಮಾಡಿದ ಮನುಷ್ಯನನ್ನು ಪಾಳೆಯದ ಹೊರ
ಗಿರುವ ಸ್ಥಳಕ್ಕೆ ತನ್ನಿರಿ. ಬಳಿಕ ಅವನ ದೂಷಣೆ ಮಾತು
ಗಳನ್ನು ಕೇಳಿದ ಎಲ್ಲಾ ಜನರನ್ನು ಒಟ್ಟಾಗಿ ಕರೆಸಿರಿ. ಆ
ಜನರು ತಮ್ಮ ಕೈಗಳನ್ನು ಅವನ ತಲೆಯ ಮೇಲೆ ಇಡು
ವರು. ಆ ಬಳಿಕ ಎಲ್ಲಾ ಜನರು ಅವನಿಗೆ ಕಲ್ಲೆಸೆದು ಕೊಲ್ಲ
ಬೇಕು. 15 ನೀನು ಇಸ್ರೇಲರಿಗೆ ಹೀಗೆ ಹೇಳಬೇಕು: ದೇವ
ದೂಷಣೆ ಮಾಡಿದವನಿಗೆ ಶಿಕ್ಷೆಯಾಗಬೇಕು. 16 ಯಾವ
ನಾದರೂ ಯೆಹೋವನ ನಾಮದ ವಿರುದ್ಧ ಮಾತಾಡಿ
ದರೆ, ಅವನಿಗೆ ಮರಣ ಶಿಕ್ಷೆಯಾಗಬೇಕು. ಜನರೆಲ್ಲರೂ
ಅವನಿಗೆ ಕಲ್ಲೆಸೆದು ಕೊಲ್ಲಬೇಕು. ಯೆಹೋವನ ನಾಮ
ವನ್ನು ನಿಂದಿಸುವ ಪರದೇಶಸ್ಥರಿಗೂ ಅದೇ ರೀತಿಯ ಶಿಕ್ಷೆ
ಯಾಗಬೇಕು. ಯೆಹೋವನ ನಾಮವನ್ನು ನಿಂದಿಸುವ
ವನಿಗೆ ಮರಣಶಿಕ್ಷೆಯಾಗಬೇಕು.
17 ''ಒಬ್ಬನು ಇನ್ನೊಬ್ಬನನ್ನು ಕೊಂದರೆ, ಕೊಂದವನಿಗೆ
ಮರಣ ಶಿಕ್ಷೆಯಾಗಬೇಕು. 18 ಇನ್ನೊಬ್ಬನಿಗೆ ಸೇರಿದ ಪಶು
ವನ್ನು ಕೊಲ್ಲುವವನು ಅದಕ್ಕೆ ಪ್ರತಿಯಾಗಿ ಇನ್ನೊಂದು
ಪಶುವನ್ನು ಕೊಡಬೇಕು.
19 ''ಒಬ್ಬನು ತನ್ನ ನೆರೆಯವನನ್ನು ಅಂಗವಿಕಲನನ್ನಾಗಿ
ಮಾಡಿದರೆ, ಅವನಿಗೂ ಅದೇ ರೀತಿ ಮಾಡಬೇಕು.
20 ಮುರಿದ ಮೂಳೆಗೆ ಬದಲಾಗಿ ಅವನ ಮೂಳೆಯನ್ನು
ಮುರಿಯಬೇಕು. ಕಣ್ಣಿಗೆ ಪ್ರತಿಯಾಗಿ ಕಣ್ಣನ್ನೂ ಹಲ್ಲಿಗೆ
ಪ್ರತಿಯಾಗಿ ಹಲ್ಲನ್ನೂ ತೆಗೆಯಬೇಕು. 21 ಒಬ್ಬನು ಪಶು
ವೊಂದನ್ನು ಕೊಂದರೆ, ಅವನು ಅದಕ್ಕೆ ಬದಲಾಗಿ ಈಡು
ಕೊಡಬೇಕು. ಆದರೆ ಒಬ್ಬನು ಇನ್ನೊಬ್ಬನನ್ನು ಕೊಂದರೆ,
ಕೊಂದವನಿಗೆ ಮರಣಶಿಕ್ಷೆಯಾಗಬೇಕು.
22 ''ಈ ಕಟ್ಟಳೆ ನ್ಯಾಯವಾದದ್ದು. ಅದು ನಿಮ್ಮ ಸ್ವದೇಶ
ದವರಿಗೆ ಅನ್ವಯಿಸುವಂತೆ ಪರದೇಶಸ್ಥರಿಗೂ ಅನ್ವಯಿ
ಸುವುದು. ಯಾಕಂದರೆ ನಾನೇ ನಿಮ್ಮ ದೇವರಾದ
ಯೆಹೋವನು.''
23 ಬಳಿಕ ಮೋಶೆಯು ಇಸ್ರೇಲರೊಂದಿಗೆ ಮಾತಾ
ಡಿದನು. ಆಗ ಅವರು ದೂಷಣೆ ಮಾಡಿದ ಮನುಷ್ಯನನ್ನು
ಪಾಳೆಯದ ಹೊರಗೆ ತೆಗೆದುಕೊಂಡು ಹೋಗಿ ಅವನಿಗೆ

ಕಲ್ಲೆಸೆದು ಕೊಂದರು. ಯೆಹೋವನು ಮೋಶೆಗೆ
ಆಜ್ಞಾಪಿಸಿದಂತೆಯೇ ಅವರು ಮಾಡಿದರು.

### ಭೂಮಿಗೆ ವಿಶ್ರಾಂತಿಯ ಸಮಯ

25 ಯೆಹೋವನು ಮೋಶೆಯೊಡನೆ ಸೀನಾಯಿ
ಬೆಟ್ಟದಲ್ಲಿ ಮಾತಾಡಿದನು. ಯೆಹೋವನು
ಹೇಳಿದ್ದೇನೆಂದರೆ: 2“ಇಸ್ರೇಲರಿಗೆ ಹೀಗೆ ಹೇಳು: ನಾನು
ನಿಮಗೆ ಕೊಡುತ್ತಿರುವ ದೇಶಕ್ಕೆ ನೀವು ಪ್ರವೇಶಿಸುವಿರಿ.
ಆ ಸಮಯದಲ್ಲಿ ನೀವು ಭೂಮಿಗೆ ವಿಶ್ರಾಂತಿಯ ಸಮಯ
ವಿರುವುದಕ್ಕೆ ಬಿಡಬೇಕು. ಇದು ಯೆಹೋವನನ್ನು ಸನ್ಮಾನಿ
ಸುವುದಕ್ಕಾಗಿರುವ ವಿಶೇಷವಾದ ವಿಶ್ರಾಂತಿಯ ಸಮಯ
ವಾಗಿರುವುದು. 3ನೀವು ಆರು ವರ್ಷಗಳು ನಿಮ್ಮ ಹೊಲ
ದಲ್ಲಿ ಬೀಜಬಿತ್ತುವಿರಿ. ಆರು ವರ್ಷಗಳು ನಿಮ್ಮ ದ್ರಾಕ್ಷಿ
ತೋಟಗಳಲ್ಲಿ ಕೆಲಸಮಾಡುವಿರಿ; ಅದರ ಫಲಗಳನ್ನು
ಒಟ್ಟುಗೂಡಿಸುವಿರಿ. 4ಆದರೆ ಏಳನೆಯ ವರ್ಷದಲ್ಲಿ ನೀವು
ಭೂಮಿಗೆ ವಿಶ್ರಾಂತಿ ಕೊಡುವಿರಿ. ಇದು ಯೆಹೋವನನ್ನು
ಸನ್ಮಾನಿಸಲು ನೇಮಕವಾದ ವಿಶ್ರಾಂತಿಯ ವಿಶೇಷ
ಸಮಯವಾಗಿರುವುದು. ನೀವು ನಿಮ್ಮ ಹೊಲಗಳಲ್ಲಿ
ಬೀಜವನ್ನು ಬಿತ್ತಬಾರದು, ದ್ರಾಕ್ಷಿತೋಟದ ಕೆಲಸವನ್ನು
ಮಾಡಬಾರದು. 5ಕೊಯ್ಲಿನ ನಂತರ ತನ್ನಷ್ಟಕ್ಕೆ ತಾನೇ
ಬೆಳೆದ ಪೈರನ್ನೂ ಕೊಯ್ಯಬಾರದು. ನೀವು ಸಮರಿಲ್ಲದ
ದ್ರಾಕ್ಷಾಲತೆಗಳಲ್ಲಿ ಬಂದ ದ್ರಾಕ್ಷಿಯನ್ನು ಸಂಗ್ರಹಿಸ
ಬಾರದು. ಭೂಮಿಗೆ ಒಂದು ವರ್ಷದ ವಿಶ್ರಾಂತಿ
ಯಿರುವುದು.

6“ಸಬ್ಬತ್ ವರ್ಷದಲ್ಲಿ (ವಿಶ್ರಾಂತಿಯ ವರ್ಷದಲ್ಲಿ)
ಭೂಮಿಯು ತಾನಾಗಿ ಫಲಿಸುವ ಬೆಳೆಯಿಂದ ನಿಮಗೆ
ಸಾಕಷ್ಟು ಆಹಾರವಿರುವುದು. ನಿಮ್ಮ ದಾಸದಾಸಿಯರಿಗೂ
ಸಾಕಷ್ಟು ಆಹಾರವಿರುವುದು. ನಿಮ್ಮ ದೇಶದಲ್ಲಿ ವಾಸ
ವಾಗಿರುವ ಕೂಲಿಯಾಳುಗಳಿಗೂ ಪರದೇಶಸ್ಥರಿಗೂ
ಸಾಕಷ್ಟು ಆಹಾರವಿರುವುದು. 7ನಿಮ್ಮ ದನಗಳಿಗೂ ಇತರ
ಪ್ರಾಣಿಗಳಿಗೂ ತಿನ್ನುವುದಕ್ಕೆ ಸಾಕಷ್ಟು ಆಹಾರವಿರುವುದು.

### ಜ್ಯೂಬಿಲಿ–ಬಿಡುಗಡೆಯ ವರ್ಷ

8“ಅದಲ್ಲದೆ, ಏಳು ವರ್ಷಗಳ ಏಳು ಗುಂಪುಗಳನ್ನು
ಲೆಕ್ಕಿಸಬೇಕು. ಈ ಏಳು ಗುಂಪುಗಳು ಸೇರಿ ಇದು ನಲವ
ತ್ತೊಂಭತ್ತು ವರ್ಷಗಳಾಗಿರುವುವು. ಆ ಸಮಯದಲ್ಲಿ
ಭೂಮಿಗೆ ಏಳು ವರ್ಷಗಳ ವಿಶ್ರಾಂತಿಯಿರುವುದು.
9ದೋಷಪರಿಹಾರಕ ದಿನದಲ್ಲಿ ಅಂದರೆ ಐವತ್ತನೆಯ
ವರ್ಷದ ಏಳನೆಯ ತಿಂಗಳ ಹತ್ತನೆಯ ದಿನದಲ್ಲಿ ದೇಶ
ದಲ್ಲೆಲ್ಲಾ ಕೊಂಬನ್ನೂದಿಸಬೇಕು. 10ಐವತ್ತನೆಯ ವರ್ಷ
ವನ್ನು ನೀವು ವಿಶೇಷ ವರ್ಷವನ್ನಾಗಿ ಮಾಡಬೇಕು. ನಿಮ್ಮ
ದೇಶದಲ್ಲಿ ವಾಸಿಸುವ ಜನರೆಲ್ಲರಿಗೆ ನೀವು ಸ್ವಾತಂತ್ರವನ್ನು
ಘೋಷಿಸಬೇಕು. ಈ ಸಮಯವು ‘ಜ್ಯೂಬಿಲಿ’ * ಎಂಬು
ದಾಗಿ ಕರೆಯಲ್ಪಡುವುದು. ನಿಮ್ಮಲ್ಲಿ ಪ್ರತಿಯೊಬ್ಬನೂ ತನ್ನ
ಸ್ವಂತ ಸ್ವಾಸ್ಥ್ಯಕ್ಕೆ* ಹಿಂತಿರುಗಿ ಹೋಗುವನು; ನಿಮ್ಮಲ್ಲಿ
ಪ್ರತಿಯೊಬ್ಬನೂ ತನ್ನ ಸ್ವಂತ ಕುಟುಂಬಕ್ಕೆ ಹಿಂತಿರು
ಗುವನು. 11ಐವತ್ತನೆಯ ವರ್ಷವು ನಿಮಗೆ ವಿಶೇಷವಾದ
ಆಚರಣೆಯಾಗಿರುವುದು. ಬೀಜವನ್ನು ಬಿತ್ತಬೇಡಿರಿ. ತನ್ನ
ಷ್ಟಕ್ಕೆ ಬೆಳೆದ ಪೈರುಗಳನ್ನು ಕೊಯ್ಯಬೇಡಿರಿ. ಸಮರಿಲ್ಲದ
ದ್ರಾಕ್ಷಾಲತೆಗಳಿಂದ ದ್ರಾಕ್ಷಿಯನ್ನು ಸಂಗ್ರಹಿಸಬೇಡಿರಿ.
12ಆ ವರ್ಷ ಜ್ಯೂಬಿಲಿಯಾಗಿದೆ. ಅದು ನಿಮಗೆ ಪವಿತ್ರ
ಸಮಯವಾಗಿರುವುದು. ಹೊಲದಿಂದ ದೊರಕುವ ಪೈರು
ಗಳು ನಿಮಗೆ ಆಹಾರವಾಗಿರುವುದು. 13ಜ್ಯೂಬಿಲಿ
ವರ್ಷದಲ್ಲಿ ಪ್ರತಿಯೊಬ್ಬನೂ ತನ್ನ ಸ್ವಂತ ಸ್ವಾಸ್ಥ್ಯಕ್ಕೆ
ಹೋಗುವನು.

14“ಭೂಮಿಯನ್ನು ನೆರೆಯವನಿಗೆ ಮಾರುವಾಗ
ಅಥವಾ ಅವನಿಂದ ಭೂಮಿಯನ್ನು ಕೊಂಡುಕೊಳ್ಳುವಾಗ
ಮೋಸ ಮಾಡಬೇಡಿ. 15ನಿಮ್ಮ ನೆರೆಯವನ ಭೂಮಿ
ಯನ್ನು ಕೊಂಡುಕೊಳ್ಳಲು ನೀವು ಬಯಸುವುದಾದರೆ,
ಆಗ ಕಳೆದ ಜ್ಯೂಬಿಲಿ ವರ್ಷದಿಂದ ಈಗ ಎಷ್ಟು ವರ್ಷ
ವಾಯಿತೆಂದು ಲೆಕ್ಕಿಸಿ ಸರಿಯಾದ ಬೆಲೆಯನ್ನು ನಿರ್ಣಯಿ
ಸಿರಿ. ನೀವು ಭೂಮಿಯನ್ನು ಮಾರುವುದಾದರೆ, ಪೈರು
ಗಳನ್ನು ಕೊಯ್ಯುವುದಕ್ಕಿರುವ ವರ್ಷಗಳನ್ನು ಲೆಕ್ಕಿಸಿ ಸರಿ
ಯಾದ ಬೆಲೆಯನ್ನು ನಿರ್ಣಯಿಸಿರಿ. 16ಇನ್ನೂ ಅನೇಕ
ವರ್ಷಗಳು ಇದ್ದರೆ, ಬೆಲೆ ಹೆಚ್ಚಾಗಿರುವುದು. ವರ್ಷಗಳು
ಕಡಿಮೆಯಾಗಿದ್ದರೆ, ಬೆಲೆ ಕಡಿಮೆಯಾಗಿರುವುದು.
ಯಾಕಂದರೆ ನಿಮ್ಮ ನೆರೆಯವನು ನಿಜವಾಗಿ ಕೇವಲ
ಕೆಲವೇ ಪೈರುಗಳನ್ನು ನಿಮಗೆ ಮಾರುತ್ತಿದ್ದಾನೆ. ಮುಂದಿನ
ಜೂಬಿಲಿ ವರ್ಷದಲ್ಲಿ ಭೂಮಿಯು ತಿರುಗಿ ಅವನ
ಕುಟುಂಬಕ್ಕೆ ಸೇರುವುದು. 17ನೀವು ಒಬ್ಬರಿಗೊಬ್ಬರು
ಮೋಸಮಾಡಬಾರದು. ನೀವು ದೇವರಿಗೆ ಭಯಪಡ
ಬೇಕು! ನಾನೇ ನಿಮ್ಮ ದೇವರಾದ ಯೆಹೋವನು!

18“ನನ್ನ ಕಟ್ಟಳೆಗಳನ್ನು ಮತ್ತು ನಿಯಮಗಳನ್ನು ಜ್ಞಾಪಕ
ಮಾಡಿರಿ. ಅವುಗಳಿಗೆ ವಿಧೇಯರಾಗಿರಿ. ಆಗ ನೀವು ನಿಮ್ಮ
ದೇಶದಲ್ಲಿ ಸುರಕ್ಷಿತವಾಗಿ ವಾಸಿಸುವಿರಿ. 19ಮತ್ತು
ಭೂಮಿಯು ಒಳ್ಳೆಯ ಪೈರುಗಳನ್ನು ಕೊಡುವುದು. ಆಗ
ನಿಮಗೆ ಬೇಕಾದಷ್ಟು ಆಹಾರವಿರುವುದು ಮತ್ತು ನೀವು
ದೇಶದಲ್ಲಿ ಸುರಕ್ಷಿತವಾಗಿ ಜೀವಿಸುವಿರಿ.

20“ಒಂದು ವೇಳೆ ನೀವು, ‘ನಾವು ಬೀಜಗಳನ್ನು ಬಿತ್ತ
ದಿದ್ದರೆ ಅಥವಾ ಪೈರುಗಳನ್ನು ಸಂಗ್ರಹಿಸದಿದ್ದರೆ ಏಳನೆಯ

---

**ಜ್ಯೂಬಿಲಿ** ‘ಈ ಸಮಯದಲ್ಲಿ ಊದುವ ತುತ್ತೂರಿಗೆ ಇರುವ ಹೀಬ್ರೂ ಪದದಿಂದ ಈ ಪದವು ಬಂದಿದೆ.

**ಸ್ವಂತ ಸ್ವಾಸ್ಥ್ಯ** ಇಸ್ರೇಲಿನಲ್ಲಿ ಭೂಮಿಯು ಕುಟುಂಬಕ್ಕೆ ಅಥವಾ ಕುಲಕ್ಕೆ ಸೇರಿದ್ದಾಗಿದೆ. ಒಬ್ಬನು ತನ್ನ ಭೂಮಿಯನ್ನು ಮಾರಿದರೂ ಜ್ಯೂಬಿಲಿಯಲ್ಲಿ ಭೂಮಿಯು ಅದು ಮೊದಲು ಯಾವ ಕುಟುಂಬಕ್ಕೆ ಅಥವಾ ಕುಲಕ್ಕೆ ಸೇರಿತ್ತೋ ಅವರದೇ ಆಗುತ್ತಿತ್ತು.

ವರ್ಷದಲ್ಲಿ ನಮಗೆ ತಿನ್ನಲು ಏನೂ ಇರುವುದಿಲ್ಲ’ ಎಂದು
ಹೇಳಬಹುದು. 21ಚಿಂತೆ ಮಾಡಬೇಡಿರಿ! ಆರನೆಯ ವರ್ಷ
ದಲ್ಲಿ ನನ್ನ ಆಶೀರ್ವಾದವು ನಿಮ್ಮ ಮೇಲಿರುವುದು. ಆ
ವರ್ಷ ಭೂಮಿಯಲ್ಲಿ ಬೆಳೆದ ಪೈರುಗಳು ಮೂರು ವರ್ಷಗ
ಳವರೆಗೆ ಬೆಳೆಯುತ್ತಿರುವುದು. 22ನೀವು ಎಂಟನೆಯ
ವರ್ಷದಲ್ಲಿ ಬೀಜ ಬಿತ್ತಿದಾಗ, ನೀವು ಇನ್ನೂ ಹಳೆಯ ಬೆಳೆ
ಯನ್ನು ತಿನ್ನುತ್ತಿರುವಿರಿ. ಒಂಭತ್ತನೆಯ ವರ್ಷದವರೆಗೆ
ಅಂದರೆ ನೀವು ಎಂಟನೆಯ ವರ್ಷದಲಿ ಬೀಜ ಫಸಲು
ಕೊಡುವವರೆಗೆ ನೀವು ಹಳೆಯ ಬೆಳೆಯನ್ನು ತಿನ್ನುವಿರಿ.

## ಆಸ್ತಿಯ ನಿಯಮಗಳು

23‘‘ ಭೂಮಿಯು ನನಗೆ ಸೇರಿದ್ದು. ಆದ್ದರಿಂದ ನೀವು
ನಿಜವಾಗಿಯೂ ಅದನ್ನು ಶಾಶ್ವತವಾಗಿ ಮಾರುವುದಕ್ಕಾ
ಗುವುದಿಲ್ಲ. ನೀವು ಕೇವಲ (ನನ್ನ ಭೂಮಿಯಲ್ಲಿ) ನನ್ನ
ಆಶ್ರಯದಲ್ಲಿ ವಾಸಿಸುತ್ತಿರುವ ಪರದೇಶಸ್ಥರೂ ಪ್ರವಾಸಿ
ಗಳೂ ಆಗಿದ್ದೀರಿ. 24ಜನರು ತಮ್ಮ ಭೂಮಿಯನ್ನು ಮಾರಿ
ದರೆ ಅದನ್ನು ಬಿಡಿಸಿಕೊಳ್ಳುವ ಹಕ್ಕು ಅವರ ಕುಟುಂಬ
ಕ್ಕಿದೆ. 25ನಿಮ್ಮ ದೇಶದಲ್ಲಿ ಒಬ್ಬನು ತನ್ನ ಆಸ್ತಿಯನ್ನು
ಮಾರುವಷ್ಟು ಬಡವನಾದರೆ ಅವನ ಹತ್ತಿರದ
ಸಂಬಂಧಿಯು ತನ್ನ ಸಂಬಂಧಿಯ ಆಸ್ತಿಯನ್ನು ಬಿಡುಗಡೆ
ಮಾಡಬೇಕು (ಮತ್ತೆ ಖರೀದಿ ಮಾಡಬೇಕು). 26ತನ್ನ
ಭೂಮಿಯನ್ನು ಬಿಡುಗಡೆ ಮಾಡಲು ಮರಳಿ ಪಡೆಯಲು
ಒಬ್ಬನಿಗೆ ಹತ್ತಿರದ ಸಂಬಂಧಿ ಇಲ್ಲದಿರಬಹುದು. ಆದರೆ
ತನ್ನ ಭೂಮಿಯನ್ನು ತನಗಾಗಿ ಬಿಡುಗಡೆ ಮಾಡಲು
(ಮರಳಿ ಪಡೆಯಲು) ಅವನು ಸಾಕಷ್ಟು ಹಣವನ್ನು
ಪಡೆಯಬಹುದು. 27ಆಗ ಅವನು ಭೂಮಿಯನ್ನು ಮಾರಿ
ಎಷ್ಟು ವರ್ಷವಾಯಿತೆಂದು ಲೆಕ್ಕ ಮಾಡಬೇಕು. ಅವನು
ಆ ಸಂಖ್ಯೆಯನ್ನು ಉಪಯೋಗಿಸಿ ಭೂಮಿಗೆ ಕೊಡತಕ್ಕ
ಹಣವನ್ನು ನಿರ್ಧರಿಸಬೇಕು. ಬಳಿಕ ಅವನು ಭೂಮಿ
ಯನ್ನು ಮರಳಿ ಕೊಂಡುಕೊಳ್ಳಬೇಕು. ಆಗ ಭೂಮಿಯು
ಮತ್ತೆ ಅವನ ಸ್ವತ್ತಾಗುವುದು. 28ಆದರೆ ಭೂಮಿಯನ್ನು
ಮರಳಿ ಕೊಂಡುಕೊಳ್ಳಲು ಬೇಕಾದಷ್ಟು ಹಣ ಅವನಿಗೆ
ದೊರಕದಿದ್ದರೆ, ಅವನು ಆ ಭೂಮಿಯನ್ನು ಯಾರಿಗೆ
ಮಾರಿದ್ದಾನೋ ಅವನ ವಶದಲ್ಲಿ ಜ್ಯೂಬಿಲಿ ವರ್ಷದ
ವರೆಗೆ ಇಡಬೇಕು. ಬಳಿಕ ಆ ವಿಶೇಷ ಬಿಡುಗಡೆಯ ಕಾಲ
ದಲ್ಲಿ ಭೂಮಿಯು ಮೊದಲಿನ ಮಾಲಿಕನ ಕುಟುಂಬಕ್ಕೆ
ಮರಳಿ ಹೋಗುವುದು. ಹೀಗಾಗಿ ಆಸ್ತಿಯು ತಿರುಗಿ ಅದರ
ಸರಿಯಾದ ಕುಟುಂಬಕ್ಕೆ ಸೇರುವುದು.

29‘‘ಯಾವನಾದರೂ ಪೌಳಿಗೋಡೆಯುಳ್ಳ ಪಟ್ಟಣದ
ಲ್ಲಿರುವ ಮನೆಯನ್ನು ಮಾರಿದರೆ, ಅದನ್ನು ಮಾರಿದ ದಿನ
ಮೊದಲುಗೊಂಡು ಒಂದು ವರ್ಷ ಪೂರ್ಣಗೊಳ್ಳುವ
ವರೆಗೆ ಹಿಂದಕ್ಕೆ ಪಡೆಯುವ ಹಕ್ಕು ಅವನಿಗೆ ಇನ್ನೂ
ಇರುತ್ತದೆ. ಮನೆಯನ್ನು ಬಿಡಿಸಿಕೊಳ್ಳುವ ಮರಳಿ ಪಡೆ
ಯುವ ಹಕ್ಕು ಒಂದು ವರ್ಷದವರೆಗೆ ಇರುವುದು.
30ಆದರೆ ಮಾಲಿಕನು ಒಂದು ವರ್ಷ ಪೂರ್ಣಗೊಳ್ಳುವ
ಮೊದಲು ಮನೆಯನ್ನು ಮರಳಿ ಕೊಂಡುಕೊಳ್ಳದಿದ್ದರೆ,
ಆಗ ಪೌಳಿಗೋಡೆಯುಳ್ಳ ಪಟ್ಟಣದಲ್ಲಿರುವ ಮನೆಯು
ಅದನ್ನು ಕೊಂಡುಕೊಂಡವನಿಗೂ ಅವನ ಸಂತತಿಯವ
ರಿಗೂ ಸೇರುವುದು. ಮನೆಯು ಜ್ಯೂಬಿಲಿ ವರ್ಷದಲ್ಲಿ
ಅದರ ಮೊದಲಿನ ಮಾಲಿಕನಿಗೆ ಸೇರುವುದಿಲ್ಲ. 31ಗೋಡೆ
ಗಳಿಲ್ಲದ ಪಟ್ಟಣಗಳನ್ನು ಬಯಲಿನ ಹೊಲಗಳಂತೆ ಪರಿ
ಗಣಿಸಬೇಕು. ಆದ್ದರಿಂದ ಆ ಸಣ್ಣ ಪಟ್ಟಣಗಳಲ್ಲಿ ಕಟ್ಟಿದ
ಮನೆಗಳು ಜ್ಯೂಬಿಲಿ ವರ್ಷದಲ್ಲಿ ಅವುಗಳ ಮೊದಲಿನ
ಮಾಲಿಕನಿಗೆ ಮರಳಿಹೋಗುತ್ತವೆ. 32‘‘ಆದರೆ ಲೇವಿ
ಯರ ಪಟ್ಟಣಗಳ ಕುರಿತು ಹೇಳುವುದಾದರೆ, ಲೇವಿ
ಯರು ತಮಗೆ ಸೇರಿದ ಪಟ್ಟಣಗಳಲ್ಲಿರುವ ತಮ್ಮ ಮನೆ
ಗಳನ್ನು ಯಾವಾಗ ಬೇಕಾದರೂ ಹಿಂದಕ್ಕೆ ಕೊಂಡುಕೊಳ್ಳ
ಬಹುದು. 33ಒಬ್ಬನು ಲೇವಿಯಿಂದ ಮನೆಯನ್ನು
ಕೊಂಡುಕೊಂಡರೆ, ಲೇವಿಯರ ಪಟ್ಟಣದಲ್ಲಿರುವ ಆ
ಮನೆಯನ್ನು ಜ್ಯೂಬಿಲಿ ಸಮಯದಲ್ಲಿ ತಿರುಗಿ ಲೇವಿ
ಯರಿಗೆ ಸೇರುವುದು. ಯಾಕಂದರೆ ಲೇವಿಯರ ಪಟ್ಟಣ
ಗಳಲ್ಲಿರುವ ಮನೆಗಳು ಲೇವಿ ಕುಟುಂಬಕ್ಕೆ ಸೇರಿದ್ದಾಗಿವೆ.
ಇಸ್ರೇಲ್ ಜನರು ಆ ಪಟ್ಟಣಗಳನ್ನು ಲೇವಿಯರಿಗೆ ಕೊಟ್ಟಿ
ದ್ದಾರೆ. ಅವು ಇಸ್ರೇಲರ ಮಧ್ಯದಲ್ಲಿರುವ ಲೇವಿಯರ ಆಸ್ತಿ
ಯಾಗಿವೆ. 34ಅಲ್ಲದೆ ಲೇವಿಯರ ಪಟ್ಟಣಗಳ ಸುತ್ತಲಿರುವ
ಹೊಲಗಳನ್ನು ಮತ್ತು ಹುಲ್ಲುಗಾವಲುಗಳನ್ನು ಮಾರ
ಬಾರದು. ಆ ಹೊಲಗಳು ಎಂದೆಂದಿಗೂ ಲೇವಿಯರಿಗೆ
ಸೇರಿವೆ.

## ಗುಲಾಮರ ಮಾಲಿಕರು ಅನುಸರಿಸತಕ್ಕ ನಿಯಮಗಳು

35‘‘ಒಂದು ವೇಳೆ ನಿಮ್ಮ ಸ್ವದೇಶದ ವ್ಯಕ್ತಿಯೊಬ್ಬನು
ಬಹಳ ಬಡವನಾಗಿ ಗತಿಹೀನನಾಗಬಹುದು. ಅವನು
ನಿಮ್ಮ ಮಧ್ಯದಲ್ಲಿ ಪ್ರವಾಸಿಯಂತೆ * ವಾಸಿಸಲು ನೀವು
ಅವಕಾಶಕೊಡಬೇಕು. 36ಅವನಿಗೆ ನೀವು ಸಾಲಕೊಡುವ
ಹಣದ ಮೇಲೆ ಬಡ್ಡಿಯನ್ನು ಹೊರಿಸಬಾರದು. ದೇವ
ರನ್ನು ಗೌರವಿಸಿರಿ. ನಿಮ್ಮ ಸಹೋದರನು * ನಿಮ್ಮ ಸಂಗಡ
ವಾಸಿಸಲಿ. 37ನೀವು ಅವನಿಗೆ ಸಾಲಕೊಡುವ ಹಣದ
ಮೇಲೆ ಬಡ್ಡಿಯನ್ನು ಹೊರಿಸಬಾರದು. ನೀವು ಅವನಿಗೆ
ಮಾರುವ ಆಹಾರ ಪದಾರ್ಥಗಳಿಂದ ಲಾಭವನ್ನು
ಗಳಿಸಲು ಪ್ರಯತ್ನಿಸಬಾರದು. 38ನಾನೇ ನಿಮ್ಮ

---

**ವಚನ 35** ಇದನ್ನು ಮತ್ತೊಂದು ರೀತಿಯಲ್ಲಿಯೂ ಅರ್ಥ ಮಾಡಿಕೊಳ್ಳಬಹುದು: ‘‘ಅವನು ಅನ್ಯನಾಗಿದ್ದರೂ ತಾತ್ಕಾಲಿಕ ನಿವಾಸಿಯಾಗಿದ್ದರೂ ಅವನಿಗೆ ಸಹಾಯ ಮಾಡಿರಿ.’’

**ಸಹೋದರನು** ಅಥವಾ ‘‘ನಿಮ್ಮ ಸ್ವಂತ ದೇಶದವನು.’’

ದೇವರಾದ ಯೆಹೋವನು! ನಾನು ನಿಮಗೆ ಕಾನಾನ್
ದೇಶವನ್ನು ಕೊಟ್ಟು ನಿಮ್ಮ ದೇವರಾಗಿರಲು ನಿಮ್ಮನ್ನು
ಈಜಿಪ್ಟಿನಿಂದ ಹೊರಗೆ ಕರೆದುಕೊಂಡು ಬಂದೆನು.

39‘‘ಒಂದು ವೇಳೆ ನಿಮ್ಮ ಸ್ವದೇಶಸ್ಥನು ಬಹಳ ಬಡವ
ನಾಗಿ ತನ್ನನ್ನು ಗುಲಾಮನನ್ನಾಗಿ ನಿಮಗೆ ಮಾರಿಕೊಂಡರೆ
ನೀವು ಅವನನ್ನು ಗುಲಾಮನನ್ನಾಗಿ ದುಡಿಸಬಾರದು.
40ಅವನು ಕೂಲಿಯಾಳಿನಂತೆಯೂ ಜ್ಯೂಬಿಲಿ ವರ್ಷದ
ವರೆಗೆ ನಿಮ್ಮ ಮಧ್ಯದಲ್ಲಿ ಪ್ರವಾಸಿಯಂತೆಯೂ ಇರು
ವನು. 41ಬಳಿಕ ನಿಮ್ಮನ್ನು ಬಿಟ್ಟುಹೋಗಲು ಅವನಿಗೆ
ಹಕ್ಕಿದೆ. ಅವನು ತನ್ನ ಮಕ್ಕಳನ್ನು ಕರೆದುಕೊಂಡು ತನ್ನ
ಕುಟುಂಬಕ್ಕೆ ಮರಳಿ ಹೋಗಬಹುದು. ಅವನು ತನ್ನ
ಪೂರ್ವಿಕರ ಸ್ವತ್ತನ್ನು ಹಿಂದಕ್ಕೆ ಪಡೆಯಬಹುದು.
42ಯಾಕಂದರೆ ಅವರು ನನ್ನ ಸೇವಕರಾಗಿದ್ದಾರೆ. ನಾನು
ಅವರನ್ನು ಈಜಿಪ್ಟಿನಲ್ಲಿ ಗುಲಾಮತನದಿಂದ ಹೊರಗೆ ಬರ
ಮಾಡಿದನು; ಅವರು ಮತ್ತೆ ಗುಲಾಮರಾಗಬಾರದು.
43ನೀವು ಈ ವ್ಯಕ್ತಿಗೆ ಕ್ರೂರ ಯಾಜಮಾನರಾಗಿರ
ಬಾರದು. ನೀವು ನಿಮ್ಮ ದೇವರನ್ನು ಗೌರವಿಸಬೇಕು.

44‘‘ನಿಮ್ಮ ಸುತ್ತಲಿರುವ ಬೇರೆ ಜನಾಂಗಗಳಿಂದ ನೀವು
ಸೇವಕ ಸೇವಕಿಯನ್ನು ಖರೀಧಿ ಮಾಡಬಹುದು.
45ಅಲ್ಲದೆ ನಿಮ್ಮ ದೇಶದಲ್ಲಿ ವಾಸಿಸುವ ಪರದೇಶಸ್ಥರಿಂದ
ಮಕ್ಕಳನ್ನು ಗುಲಾಮರನ್ನಾಗಿ ಕೊಂಡುಕೊಳ್ಳಬಹುದು.
ಗುಲಾಮರಾದ ಮಕ್ಕಳು ನಿಮಗೆ ಸೇರಿದವರಾಗಿದ್ದಾರೆ,
46ಗುಲಾಮರಾದ ಈ ಪರದೇಶಸ್ಥರನ್ನು ನೀವು ಸತ್ತನಂತರ
ನಿಮ್ಮ ಮಕ್ಕಳಿಗೆ ಕೊಡಬೇಕು. ಹೀಗೆ ಅವರು ನಿಮ್ಮ
ಮಕ್ಕಳಿಗೆ ಸೇರಿದವರಾಗುವರು. ಅವರು ಎಂದೆಂದೂ
ನಿಮ್ಮ ಗುಲಾಮರಾಗಿರುವರು. ನಿಮ್ಮ ಈ ಪರದೇಶಸ್ಥ
ರನ್ನು ಗುಲಾಮರನ್ನಾಗಿ ಮಾಡಿಕೊಳ್ಳಬಹುದು. ಆದರೆ
ನೀವು ಇಸ್ರೇಲ್ ಜನರಾದ ನಿಮ್ಮ ಸ್ವಂತ ಸಹೋದರರ
ಮೇಲೆ ಕ್ರೂರವಾದ ಒಡೆಯರಾಗಿರಬಾರದು.

47‘‘ಒಂದು ವೇಳೆ ನಿಮ್ಮ ಸ್ವದೇಶದವನು ಬಡವ
ನಾಗಿದ್ದು, ನಿಮ್ಮ ಮಧ್ಯದಲ್ಲಿ ವಾಸಿಸಲು ಬಂದ ಐಶ್ವರ್ಯ
ವಂತನಾದ ಪರದೇಶಸ್ಥನಿಗಾಗಲಿ, ಅಥವಾ ಅವನ
ಕುಟುಂಬದ ಸದಸ್ಯನಿಗಾಗಲಿ ತನ್ನನ್ನು ಮಾರಿಕೊಂಡಿ
ದ್ದರೂ ಅವನಿಗೆ ತನ್ನನ್ನು ಬಿಡಿಸಿಕೊಳ್ಳುವ ಹಕ್ಕಿದೆ. 48ಅವನ
ಸಂಬಂಧಿಕರಲ್ಲಿ ಯಾರಾದರೂ ಅವನನ್ನು ಬಿಡುಗಡೆ
ಮಾಡಬಹುದು. (ಮತ್ತೆ ಖರೀದಿ ಮಾಡಬಹುದು),
49ಅವನ ದೊಡ್ಡಪ್ಪನಾಗಲೀ ಚಿಕ್ಕಪ್ಪನಾಗಲೀ ಅವರ
ಮಕ್ಕಳಾಗಲೀ ಅವನನ್ನು ಮರಳಿ ಕೊಂಡುಕೊಳ್ಳ
ಬಹುದು. ಅವನ ಹತ್ತಿರದ ಸಂಬಂಧಿಯು ಅವನನ್ನು
ಕೊಂಡುಕೊಳ್ಳಬಹುದು. ಅವನಿಗೆ ಸಾಕಷ್ಟು ಹಣ ದೊರ
ಕಿದರೆ, ಅವನು ತಾನೇ ಹಣ ಕೊಟ್ಟು ಮತ್ತೆ ಸ್ವತಂತ್ರ
ನಾಗಬಹುದು.

50‘‘ನೀವು ಬೆಲೆಯನ್ನು ತೀರ್ಮಾನಿಸುವುದು
ಹೇಗೆಂದರೆ, ಅವನು ತನ್ನನ್ನು ಪರದೇಶಸ್ಥನಿಗೆ ಮಾರಿ
ಕೊಂಡ ದಿನದಿಂದ ಹಿಡಿದು ಮುಂದಿನ ಜ್ಯೂಬಿಲಿ ವರ್ಷದ
ವರೆಗೆ ವರ್ಷಗಳನ್ನು ಲೆಕ್ಕಿಸಿ ಬೆಲೆಯನ್ನು ತೀರ್ಮಾನಿಸಿರಿ.
ಯಾಕಂದರೆ ಅವನು ತನ್ನನ್ನು ಕೇವಲ ಕೆಲವು ವರ್ಷಗ
ಳವರೆಗೆ ಕೂಲಿಗೆ ಒಪ್ಪಿಸಿದ್ದಾನೆ. 51ಜ್ಯೂಬಿಲಿ ವರ್ಷಕ್ಕೆ
ಇನ್ನೂ ಹೆಚ್ಚು ವರ್ಷಗಳು ಇರುವುದಾದರೆ, ಅವನು ಬಹಳ
ಹೆಚ್ಚು ಹಣವನ್ನು ಕೊಡಬೇಕಾಗುತ್ತದೆ. 52ಜ್ಯೂಬಿಲಿ
ವರ್ಷಕ್ಕೆ ಕೇವಲ ಸ್ವಲ್ಪ ವರ್ಷಗಳು ಉಳಿದಿದ್ದರೆ, ಸ್ವಲ್ಪ ಹಣ
ವನ್ನು ಕೊಡಬೇಕಾಗುತ್ತದೆ. 53ಆದರೆ ಅವನು ಪರದೇಶಸ್ಥ
ನೊಡನೆ ಪ್ರತಿ ವರ್ಷ ಕೂಲಿಯಾಳಾಗಿ ವಾಸಿಸುವನು. ಪರ
ದೇಶಸ್ಥನು ಆ ವ್ಯಕ್ತಿಯ ಮೇಲೆ ಕ್ರೂರ ಯಜಮಾನನಾಗಿ
ಇರುವುದಕ್ಕೆ ಬಿಡಬೇಡಿರಿ.

54‘‘ಯಾರೂ ಅವನನ್ನು ಬಿಡಿಸದಿದ್ದರೂ ಜ್ಯೂಬಿಲಿ
ವರ್ಷದಲ್ಲಿ ಅವನು ಮತ್ತು ಅವನ ಮಕ್ಕಳು ಬಿಡುಗಡೆ
ಹೊಂದುವರು. 55ಯಾಕಂದರೆ, ಇಸ್ರೇಲರು ನನ್ನ ಸೇವಕ
ರಾಗಿದ್ದಾರೆ. ನಾನು ಅವರನ್ನು ಈಜಿಪ್ಟಿನಲ್ಲಿ ದಾಸತ್ವದಿಂದ
ಬಿಡಿಸಿದ್ದರಿಂದ ಅವರು ನನ್ನ ದಾಸರಾಗಿದ್ದಾರೆ. ನಾನೇ
ನಿಮ್ಮ ದೇವರಾದ ಯೆಹೋವನು!

### ದೇವರಿಗೆ ವಿಧೇಯರಾಗುವುದರಿಂದ ದೊರಕುವ ಪ್ರತಿಫಲಗಳು

26 ‘‘ವಿಗ್ರಹಗಳನ್ನು ಮಾಡಿಕೊಳ್ಳಬೇಡಿರಿ. ಆರಾಧಿ
ಸಲು ಕೆತ್ತಿದ ವಿಗ್ರಹಗಳನ್ನಾಗಲೀ ಕಲ್ಲುಕಂಬಗ
ಳನ್ನಾಗಲೀ ನಿಮ್ಮ ದೇಶದಲ್ಲಿ ಸ್ಥಾಪಿಸಬೇಡಿರಿ.
ಯಾಕಂದರೆ ನಾನೇ ನಿಮ್ಮ ದೇವರಾದ ಯೆಹೋವನು!

2‘‘ನನ್ನ ವಿಶ್ರಾಂತಿಯ ವಿಶೇಷ ದಿನಗಳನ್ನು ಜ್ಞಾಪಕ
ಮಾಡಿಕೊಂಡು ನನ್ನ ಪವಿತ್ರಸ್ಥಳವನ್ನು (ನನ್ನ ಆಲಯ
ದಲ್ಲಿ) ಸನ್ಮಾನಿಸಿರಿ. ನಾನೇ ಯೆಹೋವನು!

3‘‘ನನ್ನ ಕಟ್ಟಳೆಗಳನ್ನೂ ಆಜ್ಞೆಗಳನ್ನೂ ಜ್ಞಾಪಕ ಮಾಡಿ
ಕೊಂಡು ಅವುಗಳಿಗೆ ವಿಧೇಯರಾಗಿರಿ. 4ನೀವು ಅವು
ಗಳನ್ನು ಅನುಸರಿಸಿದರೆ, ನಾನು ಸರಿಯಾದ ಸಮಯದಲ್ಲಿ
ಮಳೆಯನ್ನು ಅನುಗ್ರಹಿಸುವೆನು. ಭೂಮಿಯು ಒಳ್ಳೆಯ
ಬೆಳೆಯನ್ನು ಕೊಡುವುದು ಮತ್ತು ತೋಟದ ಮರಗಳು
ತಮ್ಮ ಫಲಗಳನ್ನು ಕೊಡುವುವು. 5ಕಣತುಳಿಸುವ ಕೆಲಸವು
ದ್ರಾಕ್ಷಿಯನ್ನು ಸಂಗ್ರಹಿಸುವ ಸಮಯದವರೆಗೂ
ಮುಂದುವರಿಯುವುದು; ದ್ರಾಕ್ಷಿಯನ್ನು ಸಂಗ್ರಹಿಸುವ
ಕೆಲಸವು ಬಿತ್ತನೆಯ ಕಾಲದವರೆಗೂ ಮುಂದುವರಿಯು
ವುದು. ಆಗ ನಿಮಗೆ ಆಹಾರವು ಸಮೃದ್ಧಿಯಾಗಿರುವುದು;
ನೀವು ದೇಶದಲ್ಲಿ ಸುರಕ್ಷಿತವಾಗಿ ವಾಸಿಸುವಿರಿ. 6ನಾನು
ನಿಮ್ಮ ದೇಶಕ್ಕೆ ಸಮಾಧಾನವನ್ನು ಅನುಗ್ರಹಿಸುವೆನು.
ನೀವು ನಿರ್ಭಯವಾಗಿ ಮಲಗಿಕೊಳ್ಳುವಿರಿ. ನಿಮ್ಮನ್ನು

ಭಯಪಡಿಸಲು ಯಾರೂ ಬರುವುದಿಲ್ಲ. ದುಷ್ಟ ಮೃಗ
ಗಳು ನಿಮ್ಮ ದೇಶದಲ್ಲಿರದಂತೆ ಮಾಡುವೆನು; ಸೈನ್ಯಗಳು
ನಿಮ್ಮ ದೇಶದೊಳಕ್ಕೆ ಬರುವುದಿಲ್ಲ.
7‘‘ನೀವು ನಿಮ್ಮ ವೈರಿಗಳನ್ನು ಸೋಲಿಸಿ ಓಡಿಸಿ ಬಿಡು
ವಿರಿ. ನಿಮ್ಮ ಕತ್ತಿಗಳಿಂದ ಅವರನ್ನು ಕೊಲ್ಲುವಿರಿ. 8ನಿಮ್ಮಲ್ಲಿ
ಐದು ಮಂದಿ ನೂರು ಮಂದಿಯನ್ನು ಓಡಿಸುವರು;
ನಿಮ್ಮಲ್ಲಿ ನೂರು ಮಂದಿ ಹತ್ತು ಸಾವಿರ ಮಂದಿಯನ್ನು
ಓಡಿಸುವರು; ನೀವು ನಿಮ್ಮ ವೈರಿಗಳನ್ನು ಸೋಲಿಸಿ ಕತ್ತಿ
ಯಿಂದ ಕೊಲ್ಲುವಿರಿ.
9‘‘ಬಳಿಕ ನಾನು ನಿಮ್ಮ ಮೇಲೆ ಕಟಾಕ್ಷವಿಟ್ಟು ನಿಮಗೆ
ಅನೇಕ ಮಕ್ಕಳನ್ನು ಅನುಗ್ರಹಿಸುವೆನು. ನಾನು ನಿಮ್ಮೊಡನೆ
ಮಾಡಿಕೊಂಡ ನನ್ನ ಒಡಂಬಡಿಕೆಯನ್ನು ನೆರವೇರಿಸು
ವೆನು. 10ಒಂದು ವರ್ಷಕ್ಕಿಂತಲೂ ಹೆಚ್ಚು ಸಮಯದವರೆಗೆ
ಉಳಿಯುವಂತೆ ನಿಮಗೆ ಬೇಕಾದಷ್ಟು ದವಸಧಾನ್ಯಗಳಿರು
ತ್ತವೆ. ನೀವು ಹೊಸ ಬೆಳೆಯನ್ನು ಕೊಯ್ಯುವಿರಿ. ಆದರೆ
ಹೊಸ ಬೆಳೆಯನ್ನು ಸಂಗ್ರಹಿಸಬೇಕಾದರೆ ಹಳೆ ಬೆಳೆಯನ್ನು
ಬಿಸಾಡಬೇಕಾಗುತ್ತದೆ. 11ಅಲ್ಲದೆ ನಾನು ನಿಮ್ಮ ಮಧ್ಯ
ದಲ್ಲಿ ನನ್ನ ಪವಿತ್ರಗುಡಾರವನ್ನು ಇಡುವೆನು. ನಾನು
ನಿಮ್ಮಿಂದ ದೂರಹೋಗುವುದಿಲ್ಲ. 12ನಾನು ನಿಮ್ಮೊಂದಿಗೆ
ನಡೆಯುತ್ತಾ ನಿಮ್ಮ ದೇವರಾಗಿರುವೆನು ಮತ್ತು ನೀವು ನನ್ನ
ಜನರಾಗಿರುವಿರಿ. 13ನಿಮ್ಮ ದೇವರಾಗಿರುವ
ಯೆಹೋವನು ನಾನೇ! ನೀವು ಈಜಿಪ್ಟಿನಲ್ಲಿ ಗುಲಾಮ
ರಾಗಿದ್ದಿರಿ. ಆದರೆ ನಾನು ನಿಮ್ಮನ್ನು ಈಜಿಪ್ಟಿನಿಂದ ಕರೆದು
ಕೊಂಡು ಬಂದೆನು. ಗುಲಾಮರಾಗಿದ್ದು ಭಾರವಾದ
ಹೊರೆಗಳನ್ನು ನೀವು ಹೊರುತ್ತಾ ಗೂನಾಗಿದ್ದಿರಿ. ಆದರೆ
ನಿಮ್ಮ ಭುಜದ ಮೇಲ್ಲಿದ್ದ ನೊಗವನ್ನು ನಾನು ಮುರಿದು
ಹಾಕಿ ನೀವು ಮತ್ತೆ ನೆಟ್ಟಗೆ ನಡೆಯುವಂತೆ ಮಾಡಿದೆನು.

### ದೇವರಿಗೆ ವಿಧೇಯರಾಗದಿದ್ದರೆ ಬರುವ ಶಿಕ್ಷೆ

14‘‘ಆದರೆ ನೀವು ನನಗೆ ಮತ್ತು ನನ್ನ ಆಜ್ಞೆಗಳಿಗೆಲ್ಲಾ
ವಿಧೇಯರಾಗದಿದ್ದರೆ, ಈ ಕೆಟ್ಟ ಸಂಗತಿಗಳು, ನಿಮಗೆ
ಸಂಭವಿಸುತ್ತವೆ. 15ನೀವು ನನ್ನ ಕಟ್ಟಳೆಗಳಿಗೆ ಮತ್ತು ಆಜ್ಞೆ
ಗಳಿಗೆ ವಿಧೇಯರಾಗದಿದ್ದರೆ, ಆಗ ನೀವು ನನ್ನ ಒಡಂಬಡಿ
ಕೆಯನ್ನು ಮುರಿದವರಾಗುತ್ತೀರಿ. 16ಆಗ ನಾನು ನಿಮ್ಮ
ಮಧ್ಯೆ ಭಯಂಕರ ಸಂಗತಿಗಳು ನಡೆಯುವಂತೆ ಮಾಡು
ವೆನು. ನೀವು ವ್ಯಾಧಿಯಿಂದಲೂ ಜ್ವರದಿಂದಲೂ ನರಳು
ವಂತೆ ಮಾಡುವೆನು. ಅವು ನಿಮ್ಮ ಕಣ್ಣುಗಳನ್ನು ನಾಶ
ಮಾಡಿ ನಿಮ್ಮ ಪ್ರಾಣವನ್ನು ತೆಗೆದುಬಿಡುತ್ತವೆ; ನೀವು
ಬೀಜ ಬಿತ್ತಿದರೂ ಅದರ ಫಲವು ದೊರೆಯುವುದಿಲ್ಲ;
ನಿಮ್ಮ ವೈರಿಗಳು ನಿಮ್ಮ ಬೆಳೆಗಳನ್ನು ತಿಂದುಬಿಡುವರು!
17ನಾನು ನಿಮಗೆ ವಿಮುಖನಾಗಿರುವುದರಿಂದ ಆ ವೈರಿ
ಗಳು ನಿಮ್ಮನ್ನು ಸೋಲಿಸುವರು. ಆ ವೈರಿಗಳು ನಿಮ್ಮನ್ನು
ದ್ವೇಷಿಸುವರು ಮತ್ತು ನಿಮ್ಮನ್ನು ಆಳುವರು. ಯಾರೂ
ನಿಮ್ಮನ್ನು ಬೆನ್ನಟ್ಟದಿದ್ದರೂ ಹೆದರಿಕೊಂಡು ಓಡುವಿರಿ.
18‘‘ಇಷ್ಟಾದರೂ ನೀವು ನನಗೆ ವಿಧೇಯರಾಗದಿದ್ದರೆ
ನಿಮ್ಮ ಪಾಪಗಳಿಗಾಗಿ ಇನ್ನೂ ಏಳರಷ್ಟು ನಿಮ್ಮನ್ನು ಶಿಕ್ಷಿಸು
ವೆನು. 19ನಿಮ್ಮ ಗರ್ವಕ್ಕೆ ಕಾರಣವಾದ ಬಲಿಷ್ಟವಾದ
ಪಟ್ಟಣಗಳನ್ನು ನಾಶಮಾಡುವೆನು. ಆಕಾಶವು ಮಳೆಗರೆ
ಯುವುದಿಲ್ಲ. ಭೂಮಿಯು ಬೆಳೆಯನ್ನು ಫಲಿಸುವು
ದಿಲ್ಲ.* 20ನೀವು ಕಷ್ಟಪಟ್ಟು ದುಡಿದರೂ ನಿಮಗೆ
ಪ್ರಯೋಜನವಿರುವುದಿಲ್ಲ. ನಿಮ್ಮ ಭೂಮಿ ಯಾವ ಬೆಳೆ
ಗಳನ್ನೂ ಫಲಿಸುವುದಿಲ್ಲ; ನಿಮ್ಮ ಮರಗಳೂ ಫಲಗಳನ್ನು
ಬಿಡುವುದಿಲ್ಲ.
21‘‘ನೀವು ಇನ್ನೂ ನನಗೆ ವಿರುದ್ಧವಾಗಿ ತಿರುಗಿ
ಅವಿಧೇಯರಾದರೆ, ನಾನು ಇನ್ನೂ ಏಳರಷ್ಟು ಕಠಿಣವಾಗಿ
ನಿಮ್ಮನ್ನು ಬಾಧಿಸುವೆನು. ನೀವು ಹೆಚ್ಚು ಪಾಪಮಾಡಿ
ದಂತೆಲ್ಲಾ ಹೆಚ್ಚೆಚ್ಚಾಗಿ ಶಿಕ್ಷಿಸಲ್ಪಡುವಿರಿ. 22ನಿಮಗೆ ವಿರುದ್ಧ
ವಾಗಿ ನಾನು ಕ್ರೂರ ಮೃಗಗಳನ್ನು ಕಳುಹಿಸುವೆನು. ಅವು
ಗಳು ನಿಮ್ಮ ಮಕ್ಕಳನ್ನು ತಿಂದುಬಿಡುವವು; ನಿಮ್ಮ ಪಶು
ಗಳನ್ನು ನಾಶಮಾಡುವವು. ಅವು ನಿಮ್ಮಲ್ಲಿ ಅನೇಕ ಜನ
ರನ್ನು ಕೊಲ್ಲುವುವು. (ಜನರು ಪ್ರಯಾಣಮಾಡಲು
ಭಯಪಡುವರು.) ದಾರಿಗಳು ಜನ ಸಂಚಾರವಿಲ್ಲದೆ
ಬರಿದಾಗಿರುವವು.
23‘‘ಇಷ್ಟಾದರೂ ನೀವು ತಿದ್ದಿಕೊಳ್ಳದೆ ನನಗೆ ವಿರೋಧ
ವಾಗಿ ನಡೆದರೆ, 24ಆಗ ನಾನು ಸಹ ನಿಮಗೆ ವಿರೋಧವಾಗಿ
ನಡೆಯುವೆನು. ಹೌದು, ನಾನೇ (ಯೆಹೋವನು)
ನಿಮ್ಮನ್ನು ನಿಮ್ಮ ಪಾಪಗಳಿಗಾಗಿ ಏಳರಷ್ಟಾಗಿ ದಂಡಿಸು
ವೆನು. 25ನೀವು ನನ್ನ ಒಡಂಬಡಿಕೆಯನ್ನು ಮೀರಿದ್ದರಿಂದ
ನಾನು ನಿಮ್ಮನ್ನು ದಂಡಿಸುವೆನು. ನಿಮಗೆ ವಿರೋಧವಾಗಿ
ಸೈನ್ಯಗಳನ್ನು ಬರಮಾಡುವೆನು. ನೀವು ಭದ್ರತೆಗಾಗಿ ನಿಮ್ಮ
ಪಟ್ಟಣಗಳೊಳಗೆ ಹೋಗುವಿರಿ. ಆದರೆ ವ್ಯಾಧಿಯು
ನಿಮ್ಮಲ್ಲಿ ಹಬ್ಬುವಂತೆ ಮಾಡುವೆನು. ನಿಮ್ಮ ವೈರಿಗಳು
ನಿಮ್ಮನ್ನು ಸೋಲಿಸುವರು. 26ನಿಮಗೆ ರೊಟ್ಟಿ ದಯ
ಪಾಲಿಸುವುದನ್ನು ನಾನು ನಿಲ್ಲಿಸಿದಾಗ, (ಬಹಳ ಸ್ವಲ್ಪ
ಆಹಾರವಿರುವುದು). ಹತ್ತು ಮಂದಿ ಸ್ತ್ರೀಯರು ತಮ್ಮ
ಲ್ಲಿರುವ ಎಲ್ಲಾ ರೊಟ್ಟಿಗಳನ್ನು ಒಂದೇ ಒಲೆಯಲ್ಲಿ ಸುಡು
ವರು. ಅವರು ಪ್ರತಿ ರೊಟ್ಟಿಯ ತುಂಡನ್ನು ತೂಕ ಮಾಡಿ
ಹಂಚಿಕೊಳ್ಳುವರು. ನೀವು ತಿಂದರೂ ಹಸಿದವರಾಗಿಯೇ
ಇರುವಿರಿ.
27‘‘ನೀವು ನನ್ನ ಮಾತನ್ನು ಇನ್ನೂ ಕೇಳದೆ ನನಗೆ
ವಿರೋಧವಾಗಿ ನಡೆದರೆ, 28ನಾನು ನಿಜವಾಗಿ ನನ್ನ
ಕೋಪವನ್ನು ತೋರಿಸುವೆನು. ಹೌದು ನಾನೇ

---

**ಆಕಾಶವು …ಫಲಿಸುವುದಿಲ್ಲ** ಅಕ್ಷರಶಃ ‘‘ನಿಮ್ಮ ಆಕಾಶವು ಕಬ್ಬಿಣ
ದಂತಿರುವುದು; ನಿಮ್ಮ ಭೂಮಿಯು ತಾಮ್ರದಂತಿರುವುದು.’’

(ಯೆಹೋವನು), ನಿಮ್ಮ ಪಾಪಗಳಿಗಾಗಿ ನಿಮ್ಮನ್ನು ಏಳ
ರಷ್ಟಾಗಿ ದಂಡಿಸುವೆನು. 29ನೀವು ಬಹಳವಾಗಿ ಹಸಿದು
ನಿಮ್ಮ ಮಕ್ಕಳ ಮಾಂಸವನ್ನೇ ತಿನ್ನುವಿರಿ. 30ನಾನು ನಿಮ್ಮ
ಉನ್ನತವಾದ ಪೂಜಾ ಸ್ಥಳಗಳನ್ನು* ನಾಶಮಾಡುವೆನು.
ನಾನು ನಿಮ್ಮ ಧೂಪವೇದಿಕೆಗಳನ್ನು ಕಡಿದುಹಾಕುವೆನು.
ನಿಮ್ಮ ವಿಗ್ರಹಗಳ ಮೇಲೆ ನಿಮ್ಮ ಹೆಣಗಳನ್ನು ಹಾಕುವೆನು.
ನೀವು ನನಗೆ ಬಹಳ ಅಸಹ್ಯರಾಗಿರುವಿರಿ. 31ನಾನು ನಿಮ್ಮ
ಪಟ್ಟಣಗಳನ್ನು ನಾಶಮಾಡುವೆನು. ನಿಮ್ಮ ಪವಿತ್ರ ಸ್ಥಳಗ
ಳನ್ನು ಬರಿದು ಮಾಡುವೆನು. ನಿಮ್ಮ ಯಜ್ಞಗಳ ಸುವಾಸನೆ
ಯನ್ನು ನಾನು ಮೂಸಿ ನೋಡುವುದಿಲ್ಲ. 32ನಿಮ್ಮ ಭೂಮಿ
ಯನ್ನು ಬರಿದುಮಾಡುವೆನು. ಅದರಲ್ಲಿ ವಾಸಿಸಲು
ಬರುವ ನಿಮ್ಮ ವೈರಿಗಳೂ ಅದನ್ನು ನೋಡಿ ಆಶ್ಚರ್ಯ
ಪಡುವರು. 33ನಾನು ನಿಮ್ಮನ್ನು ಜನಾಂಗಗಳ ಮಧ್ಯದಲ್ಲಿ
ಚದರಿಸಿಬಿಡುವೆನು. ಕತ್ತಿಯನ್ನು ಹಿರಿದು ನಿಮ್ಮನ್ನು ನಾಶ
ಮಾಡುವೆನು. ನಿಮ್ಮ ಭೂಮಿ ಬರಿದಾಗುವುದು ಮತ್ತು
ನಿಮ್ಮ ಪಟ್ಟಣಗಳು ನಾಶವಾಗುವವು.

34“ನೀವು ನಿಮ್ಮ ವೈರಿಗಳ ದೇಶಕ್ಕೆ ಒಯ್ಯಲ್ಪಟ್ಟಾಗ,
ನಿಮ್ಮ ದೇಶ ಬರಿದಾಗುವುದಲ್ಲದೆ ಭೂಮಿಯು ಹಾಳು
ಬಿದ್ದು ವಿಶ್ರಾಂತಿಯನ್ನು ಅನುಭವಿಸುವುದು. 35ಪ್ರತಿ ಏಳು
ವರ್ಷದ ನಂತರ ಭೂಮಿಗೆ ವಿಶ್ರಾಂತಿ ಕೊಡಬೇಕೆಂದು
ಧರ್ಮಶಾಸ್ತ್ರ ಹೇಳಿದಂತೆ, ನೀವು ವೈರಿಗಳ ದೇಶದಲ್ಲಿ
ವಾಸಿಸಿದ ಕಾಲವೆಲ್ಲಾ ನೀವು ಭೂಮಿಗೆ ಕೊಡದೆ ಇದ್ದ
ವಿಶ್ರಾಂತಿಯನ್ನು ಆ ಸಮಯದಲ್ಲಿ ಭೂಮಿಯು ಪಡೆದು
ಕೊಳ್ಳುವುದು. 36ತಮ್ಮ ವೈರಿಗಳ ದೇಶದಲ್ಲಿ ಉಳಿದು
ಕೊಂಡು ಅಧೈರ್ಯಗೊಳ್ಳುವರು. ಅವರು ಪ್ರತಿ
ಯೊಂದಕ್ಕೂ ದಿಗಿಲು ಪಡುವರು. ಗಾಳಿಯಿಂದ ತೂರಿ
ಹೋಗುವ ಎಲೆಯ ಶಬ್ದಕ್ಕೆ ಅವರು ಓಡಿಹೋಗುವರು.
ಕತ್ತಿಯನ್ನು ಹಿಡಿದುಕೊಂಡು ಬೆನ್ನಟ್ಟುತ್ತಿದ್ದಾರೋ
ಎಂಬಂತೆ ಅವರು ಓಡಿಹೋಗುವರು. ಯಾರೂ ಬೆನ್ನಟ್ಟ
ದಿದ್ದಾಗಲೂ ಅವರು ಎಡವಿ ಬೀಳುವರು. 37ಒಬ್ಬನು ಕತ್ತಿ
ಯನ್ನು ಹಿಡಿದುಕೊಂಡು ಬೆನ್ನಟ್ಟುವಾಗ ಓಡಿ ಹೋಗು
ವಂತೆ ಅವರು ಓಡಿಹೋಗುವರು. ಯಾರೂ ಅವರನ್ನು
ಬೆನ್ನಟ್ಟದಿದ್ದಾಗಲೂ ಅವರು ಒಬ್ಬರ ಮೇಲೊಬ್ಬರು
ಬೀಳುವರು.

“ನೀವು ನಿಮ್ಮ ವೈರಿಗಳ ವಿರುದ್ಧವಾಗಿ ನಿಲ್ಲುವಷ್ಟು ಶಕ್ತಿ
ಯುಳ್ಳವರಾಗಿರುವುದಿಲ್ಲ. 38ನೀವು ಬೇರೆ ಜನಾಂಗಗಳಲ್ಲಿ
ಬೆರೆತು ಇಲ್ಲದಂತಾಗುವಿರಿ. ನಿಮ್ಮ ವೈರಿಗಳ ದೇಶದಲ್ಲಿ
ನೀವು ಮಾಯವಾಗಿ ಹೋಗುವಿರಿ. 39ಆದ್ದರಿಂದ ನಿಮ್ಮಲ್ಲಿ
ಉಳಿದವರು ತಮ್ಮ ಪಾಪದ ದೆಸೆಯಿಂದಲೂ ತಮ್ಮ
ಪೂರ್ವಿಕರ ಪಾಪದ ದೆಸೆಯಿಂದಲೂ ಅವರಂತೆಯೇ
ಶತ್ರುಗಳ ದೇಶಗಳಲ್ಲಿ ಕ್ಷಯಿಸಿಹೋಗುವರು.

40“ಒಂದುವೇಳೆ ಜನರು ತಮ್ಮ ಪಾಪಗಳನ್ನೂ ತಮ್ಮ
ಪೂರ್ವಿಕರ ಪಾಪಗಳನ್ನೂ ಅರಿಕೆ ಮಾಡಬಹುದು; ನನಗೆ
ವಿರುದ್ಧವಾಗಿ ಪಾಪಮಾಡಿರುವುದಾಗಿಯೂ ನನಗೆ
ವಿರೋಧವಾಗಿ ತಿರುಗಿರುವುದಾಗಿಯೂ ಅವರು ಒಪ್ಪಿ
ಕೊಂಡು 41ನಾನು ಅವರಿಗೆ ವಿಮುಖನಾಗಿ ಅವರನ್ನು
ಶತ್ರುಗಳ ದೇಶಕ್ಕೆ ಕರೆದುಕೊಂಡು ಬಂದೆನೆಂದು ಅವರು
ಅರಿತುಕೊಂಡು ತಮ್ಮನ್ನು ತಗ್ಗಿಸಿಕೊಂಡು* ತಮ್ಮ
ಪಾಪಕ್ಕೆ ಬರತಕ್ಕ ಶಿಕ್ಷೆಯನ್ನು ಸ್ವೀಕರಿಸಲು ಯೋಗ್ಯ
ರೆಂದು ಹೇಳಿಕೊಂಡರೆ 42ಆಗ ನಾನು ಯಾಕೋಬ
ನೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನೂ ಇಸಾಕ
ನೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನೂ ಅಬ್ರ
ಹಾಮನೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನೂ
ದೇಶವನ್ನೂ ಜ್ಞಾಪಕಮಾಡಿಕೊಳ್ಳುವೆನು.

43“ದೇಶವು ಬರಿದಾಗಿದ್ದು ವಿಶ್ರಾಂತಿಯನ್ನು ಅನುಭ
ವಿಸುವುದು. ಆಗ ಜೀವಂತವಾಗಿ ಉಳಿದವರು ತಮ್ಮ ಪಾಪ
ಗಳಿಗೆ ಬರತಕ್ಕ ಶಿಕ್ಷೆಯನ್ನು ಅನುಭವಿಸುವರು. ನನ್ನ
ನಿಯಮಗಳನ್ನು ದ್ವೇಷಿಸಿ ನನ್ನ ವಿಧಿಗಳಿಗೆ ಅವಿಧೇಯ
ರಾದ್ದರಿಂದ ತಮಗೆ ಶಿಕ್ಷೆಯಾಯಿತೆಂದು ಅವರು ಅರಿತು
ಕೊಳ್ಳುವರು. 44ಅವರು ನಿಜವಾಗಿ ಪಾಪಮಾಡಿದ್ದರೂ
ಸಹಾಯಕ್ಕಾಗಿ ಅವರು ನನ್ನ ಬಳಿಗೆ ಬಂದರೆ ನಾನು ಅವರಿ
ಗೆ ವಿಮುಖನಾಗುವುದಿಲ್ಲ. ಅವರು ತಮ್ಮ ಶತ್ರುಗಳ ದೇಶ
ದಲ್ಲಿದ್ದರೂ ನಾನು ಅವರಿಗೆ ಕಿವಿಗೊಡುವೆನು. ಅವರನ್ನು
ಸಂಪೂರ್ಣವಾಗಿ ನಾಶಮಾಡುವುದಿಲ್ಲ. ಅವರೊಂದಿಗೆ
ಮಾಡಿಕೊಂಡ ಒಡಂಬಡಿಕೆಯನ್ನು ಮರೆಯುವುದಿಲ್ಲ.
ಯಾಕಂದರೆ ನಾನೇ ಅವರ ದೇವರಾದ ಯೆಹೋವನು!
45ಅವರಿಗೋಸ್ಕರ ಅವರ ಪೂರ್ವಿಕರ ಸಂಗಡ ಮಾಡಿ
ಕೊಂಡ ಒಡಂಬಡಿಕೆಯನ್ನು ನೆನಪಿಗೆ ತಂದುಕೊಂಡು
ಅವರಿಗೆ ಹಿತವನ್ನು ಮಾಡುವೆನು. ನಾನು ಅವರ ದೇವ
ರಾಗಿರಬೇಕೆಂದು ಅವರ ಪೂರ್ವಿಕರನ್ನು ಈಜಿಪ್ಟ್ ದೇಶ
ದಿಂದ ಹೊರಗೆ ಕರೆದುಕೊಂಡು ಬಂದೆನು. ಬೇರೆ
ಜನಾಂಗಗಳವರು ಆ ಸಂಗತಿಗಳನ್ನು ನೋಡಿದರು.
ನಾನೇ ಯೆಹೋವನು!”

46ಯೆಹೋವನು ಇಸ್ರೇಲರಿಗೆ ಕೊಟ್ಟ ಕಟ್ಟಳೆಗಳು,
ನಿಯಮಗಳು ಮತ್ತು ಉಪದೇಶಗಳು ಇವೇ. ಇದು
ಯೆಹೋವನ ಮತ್ತು ಇಸ್ರೇಲರ ನಡುವೆ ಆದ ಒಡಂಬಡಿ
ಕೆಯ ನಿಯಮಗಳಾಗಿವೆ. ಯೆಹೋವನು ಆ ನಿಯಮ
ಗಳನ್ನು ಸೀನಾಯಿ ಬೆಟ್ಟದಲ್ಲಿ ಮೋಶೆಗೆ ಕೊಟ್ಟನು.
ಮೋಶೆಯು ಅವುಗಳನ್ನು ಜನರಿಗೆ ಕೊಟ್ಟನು.

---

**ಉನ್ನತವಾದ ಪೂಜಾ ಸ್ಥಳಗಳು** ದೇವರನ್ನು ಅಥವಾ ಸುಳ್ಳು ದೇವರುಗಳನ್ನು ಆರಾಧಿಸಲು ಉಪಯೋಗಿಸುತ್ತಿದ್ದ ಸ್ಥಳ. ಈ ಸ್ಥಳಗಳು ಸಾಮಾನ್ಯವಾಗಿ ಬೆಟ್ಟ ಗುಡ್ಡಗಳ ಮೇಲೆ ಇರುತ್ತಿದ್ದವು.

**ಆ ಜನರು … ತಗ್ಗಿಸಿಕೊಂಡು** ಅಕ್ಷರಶಃ “ಅವರ ಸುನ್ನತಿಹೊಂದಿಲ್ಲದ ಹೃದಯಗಳನ್ನು ತಗ್ಗಿಸಿಕೊಂಡರೆ.”

### ಹರಕೆಗಳು ಪ್ರಾಮುಖ್ಯವಾಗಿವೆ

27 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[2]“ಇಸ್ರೇಲರಿಗೆ ಹೀಗೆ ಹೇಳು: ಯಾವನಾದರೂ
ಯೆಹೋವನಿಗೆ ಅವನು ಒಬ್ಬ ವ್ಯಕ್ತಿಯನ್ನು ಪ್ರತಿಷ್ಠಿಸುವುದ
ಕ್ಕಾಗಿ ಹರಕೆ ಮಾಡಿಕೊಂಡರೆ ಅವನಿಗೆ ಒಂದು ಬೆಲೆ
ಯನ್ನು ನಿಗದಿಮಾಡಬೇಕು. ಅವನನ್ನು ಯೆಹೋವನಿಂದ
ಮರಳಿ ಕೊಂಡುಕೊಳ್ಳ ಬಯಸುವವರು ಆ ಬೆಲೆಯನ್ನು
ಕೊಡಬೇಕು. [3]ಇಪ್ಪತ್ತರಿಂದ ಅರವತ್ತು ವರ್ಷದ ಒಳ
ಗಿರುವ ಮನುಷ್ಯನ ಬೆಲೆ ಐವತ್ತು ಶೆಕೆಲ್* ಬೆಳ್ಳಿಯಾಗಿದೆ
(ಬೆಳ್ಳಿಯನ್ನು ಅಳೆಯಲು ಅಧಿಕೃತ ಅಳತೆಯನ್ನು * ಉಪ
ಯೋಗಿಸಬೇಕು.) [4]ಇಪ್ಪತ್ತರಿಂದ ಅರವತ್ತು ವರ್ಷದೊಳ
ಗಿರುವ ಸ್ತ್ರೀಯ ಬೆಲೆ ಮೂವತ್ತು ಶೆಕೆಲ್‌ಗಳಾಗಿದೆ. [5]ಐದ
ರಿಂದ ಇಪ್ಪತ್ತು ವರ್ಷದೊಳಗಿರುವ ಗಂಡಸಿನ ಬೆಲೆ
ಇಪ್ಪತ್ತು ಶೆಕೆಲ್‌ಗಳಾಗಿದೆ. ಐದರಿಂದ ಇಪ್ಪತ್ತು ವರ್ಷ
ದೊಳಗಿರುವ ಸ್ತ್ರೀಯ ಬೆಲೆ ಹತ್ತು ಶೆಕೆಲ್‌ಗಳಾಗಿದೆ.
[6]ಒಂದು ತಿಂಗಳಿಂದ ಐದು ವರ್ಷದೊಳಗಿನ ಗಂಡು
ಮಗುವಿನ ಬೆಲೆ ಐದು ಶೆಕೆಲ್‌ಗಳಾಗಿದೆ. ಹೆಣ್ಣುಮಗುವಿನ
ಬೆಲೆ ಮೂರು ಶೆಕೆಲ್‌ಗಳು. [7]ಅರವತ್ತು ಮತ್ತು ಅದಕ್ಕಿಂತ
ಹೆಚ್ಚಿನ ವಯಸ್ಸಾದ ಪುರುಷನ ಬೆಲೆ ಹದಿನೈದು ಶೆಕೆಲ್
ಗಳು. ಸ್ತ್ರೀಯ ಬೆಲೆ ಹತ್ತು ಶೆಕೆಲ್‌ಗಳು.
[8]“ಒಬ್ಬನು ಬೆಲೆಯನ್ನು ಕೊಡಲಾಗದಷ್ಟು ಬಡವ
ನಾಗಿದ್ದರೆ, ಅವನನ್ನು ಯಾಜಕನ ಬಳಿಗೆ ತನ್ನಿರಿ. ಅವನು
(ದೇವರಿಗೆ ಹರಕೆ ಮಾಡಿದವನು) ಎಷ್ಟು ಹಣ ಕೊಡಲು
ಶಕ್ತನಾಗಿದ್ದಾನೆಂದು ಯಾಜಕನು ತೀರ್ಮಾನಿಸುವನು.

### ಯೆಹೋವನಿಗೆ ಕಾಣಿಕೆ

[9]“ಒಬ್ಬನು ಪಶುಗಳನ್ನು ಯೆಹೋವನಿಗೆ ಯಜ್ಞಕ್ಕಾಗಿ
ಪ್ರತಿಷ್ಠಿಸಬಹುದು. ಯಾವನಾದರೂ ಅಂಥ ಪಶುವನ್ನು
ತಂದರೆ, ಅದು ಪವಿತ್ರವಾಗುವುದು. [10]ಯಾಕಂದರೆ
ಅದನ್ನು ಪ್ರತಿಷ್ಠಿಸಿದ ವ್ಯಕ್ತಿ ಅದನ್ನು ಯೆಹೋವನಿಗೆ
ಅರ್ಪಿಸುತ್ತೇನೆಂದು ಹರಕೆ ಮಾಡಿರುತ್ತಾನೆ. ಆದ್ದರಿಂದ
ಅವನು ಅದರ ಬದಲು ಇನ್ನೊಂದು ಪಶುವನ್ನು ಕೊಡಲು
ಪ್ರಯತ್ನಿಸಬಾರದು; ಅದನ್ನು ಬದಲಾಯಿಸಲು ಪ್ರಯತ್ನಿ
ಸಬಾರದು. ಅವನು ಒಳ್ಳೆಯ ಪಶುವಿನ ಬದಲಾಗಿ ಕೆಟ್ಟ
ಪಶುವನ್ನು ಕೊಡಲು ಪ್ರಯತ್ನಿಸಬಾರದು. ಅವನು
ಒಳ್ಳೆಯ ಪಶುವನ್ನು ಕೊಡುವುದಕ್ಕಾಗಿ ಕೆಟ್ಟ ಪಶುವನ್ನು
ಬದಲಾಯಿಸಬಾರದು. ಅವನು ಪಶುಗಳನ್ನು ಬದಲಾ
ಯಿಸಲು ಪ್ರಯತ್ನಿಸಿದರೆ, ಆ ಎರಡು ಪಶುಗಳೂ ಪವಿತ್ರ
ವಾಗುತ್ತವೆ. ಅವೆರಡೂ ಯೆಹೋವನದಾಗಿರುತ್ತವೆ.

[11]“ಯೆಹೋವನಿಗೆ ಸಮರ್ಪಿಸಕೂಡದ ಕೆಲವು ಪ್ರಾಣಿ
ಗಳಿರುವುವು. ಒಬ್ಬನು ಅಂಥ ಅಶುದ್ಧ ಪಶುಗಳ
ಲ್ಲೊಂದನ್ನು ಯೆಹೋವನಿಗಾಗಿ ಪ್ರತಿಷ್ಠಿಸಿದರೆ, ಅದನ್ನು
ಯಾಜಕನ ಬಳಿಗೆ ತರಬೇಕು. [12]ಯಾಜಕನು ಆ ಪಶುವಿಗೆ
ಬೆಲೆಯನ್ನು ಗೊತ್ತುಮಾಡುವನು. ಪಶುವು ಒಳ್ಳೆಯದ್ದಾ
ಗಿದ್ದರೂ ಕೆಟ್ಟದ್ದಾಗಿದ್ದರೂ ಯಾಜಕನು ನಿರ್ಣಯಿಸಿದ
ಬೆಲೆಯೇ ಅದರ ಬೆಲೆಯಾಗಿರುತ್ತದೆ. [13]ಹರಕೆ ಮಾಡಿದ
ವನು ಅದನ್ನು ಬಿಡುಗಡೆ ಮಾಡಬೇಕೆಂದಿದ್ದರೆ (ಅದನ್ನು
ಮತ್ತೆ ಕೊಂಡುಕೊಳ್ಳಬೇಕೆಂದಿದ್ದರೆ), ಅದರ ಬೆಲೆ
ಯೊಡನೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಕೊಡ
ಬೇಕು.

### ಮನೆಯ ಬೆಲೆ

[14]“ಒಬ್ಬನು ತನ್ನ ಮನೆಯನ್ನು ಯೆಹೋವನಿಗೆ ಮೀಸ
ಲಾಗಿ ಪ್ರತಿಷ್ಠಿಸಿದರೆ, ಯಾಜಕನು ಅದಕ್ಕೆ ಬೆಲೆಯನ್ನು
ನಿರ್ಣಯಿಸುವನು. ಮನೆಯು ಒಳ್ಳೆಯದ್ದಾಗಿದ್ದರೂ ಕೆಟ್ಟ
ದ್ದಾಗಿದ್ದರೂ ಯಾಜಕನು ನಿರ್ಣಯಿಸಿದ ಬೆಲೆಯೇ
ಅದರ ಬೆಲೆಯಾಗಿರುತ್ತದೆ. [15]ಆದರೆ ಹರಕೆ ಮಾಡಿದವನು
ಮನೆಯನ್ನು ಹಿಂದಕ್ಕೆ ಪಡೆಯಲು ಬಯಸಿದರೆ, ಆಗ
ಅವನು ಅದರ ಬೆಲೆಯೊಡನೆ ಐದನೆಯ ಒಂದು ಭಾಗ
ವನ್ನು ಹೆಚ್ಚಾಗಿ ಕೊಡಬೇಕು. ಆಗ ಅದು ಅವನ
ದಾಗುವುದು.

### ಆಸ್ತಿಯ ಬೆಲೆ

[16]“ಒಬ್ಬನು ತನ್ನ ಹೊಲಗಳಲ್ಲಿ ಒಂದು ಭಾಗವನ್ನು
ಯೆಹೋವನಿಗಾಗಿ ಪ್ರತಿಷ್ಠಿಸಿದರೆ, ಅದರಲ್ಲಿ ಬಿತ್ತುವುದಕ್ಕೆ
ಬೇಕಾಗಿರುವ ಬೀಜಗಳನ್ನು ಆಧಾರ ಮಾಡಿಕೊಂಡ ಬೆಲೆ
ಯನ್ನು ನಿಗದಿ ಮಾಡಬೇಕು. ಪ್ರತಿಯೊಂದು
ಹೋಮೆರ್* (ಎರಡು ಖಂಡುಗ) ಜವೆಗೋಧಿಯನ್ನು
ಉತ್ಪಾದಿಸುವ ಹೊಲವು ಐವತ್ತು ಶೆಕೆಲ್* ಬೆಲೆ
ಬಾಳುವುದು. [17]ಒಬ್ಬನು ಜ್ಯೂಬಿಲಿ ಸಂವತ್ಸರದಲ್ಲಿ ತನ್ನ
ಹೊಲವನ್ನು ಕೊಟ್ಟರೆ, ಆಗ ಅದರ ಬೆಲೆಯು ಯಾಜಕನು
ತೀರ್ಮಾನಿಸಿದಷ್ಟು ಇರುವುದು. [18]ಆದರೆ ಒಬ್ಬನು
ಜ್ಯೂಬಿಲಿಯ ನಂತರ ತನ್ನ ಹೊಲವನ್ನು ಕೊಟ್ಟರೆ, ಯಾಜ
ಕನು ಅದರ ಸರಿಯಾದ ಬೆಲೆಯನ್ನು ಲೆಕ್ಕಹಾಕಬೇಕು.
ಅವನು ಮುಂದಿನ ಜ್ಯೂಬಿಲಿ ಸಂವತ್ಸರಕ್ಕೆ ಇರುವ ವರ್ಷ
ಗಳನ್ನು ಲೆಕ್ಕಹಾಕಿ ಅದರಿಂದ ಬೆಲೆಯನ್ನು ನಿರ್ಣಯಿಸ
ಬೇಕು. [19]ಹೊಲವನ್ನು ಕೊಟ್ಟವನು ಅದನ್ನು ಬಿಡಿಸಿಕೊಳ್ಳ
ಬೇಕೆಂದು ಬಯಸುವುದಾದರೆ, ಅವನು ಅದರ ಬೆಲೆಗೆ
ಐದನೆಯ ಒಂದಂಶವನ್ನು ಸೇರಿಸಿ ಕೊಡಬೇಕು. ಆಗ
ಹೊಲವು ತಿರುಗಿ ಅವನದಾಗುವುದು. [20]ಅವನು

---

**ಶೆಕೆಲ್** ಒಂದು ಶೆಕೆಲ್ ಅಂದರೆ ಎರಡೂವರೆ ಔನ್ಸ್.

**ಅಧಿಕೃತ ಅಳತೆ** ಅಕ್ಷರಶಃ “ಪವಿತ್ರ ಶೆಕೆಲ್” ದೇವದರ್ಶನಗುಡಾರದಲ್ಲಿ ಉಪಯೋಗಿಸುತ್ತಿದ್ದ ಅಧಿಕೃತವಾದ ಅಳತೆಮಾನ.

**ಹೋಮೆರ್** ಒಂದು ಹೋಮೆರ್ ಆರು ಬುಶೆಲ್ಸ್‌ಗಳಿಗೆ ಸಮವಾಗಿದೆ.

**ಶೆಕೆಲ್** ಒಂದು ಶೆಕೆಲ್ ಅಂದರೆ ಎರಡೂವರೆ ಔನ್ಸ್.

ಹೊಲವನ್ನು ಬಿಡಿಸಿಕೊಳ್ಳದಿದ್ದರೆ ಅದು ಯಾವಾಗಲೂ ಯಾಜಕರುಗಳಿಗೆ ಸೇರಿದ್ದಾಗಿರುತ್ತದೆ. ಭೂಮಿಯು ಮತ್ತೊಬ್ಬನಿಗೆ ಮಾರಲ್ಪಟ್ಟಿದ್ದರೆ, ಮೊದಲನೆಯ ವ್ಯಕ್ತಿಯು ಅದನ್ನು ಮತ್ತೆ ಖರೀದಿ ಮಾಡಲು ಸಾಧ್ಯವಿಲ್ಲ.
21ಅವನು ಭೂಮಿಯನ್ನು ಹಿಂದಕ್ಕೆ ಕೊಂಡುಕೊಳ್ಳ ದಿದ್ದರೆ, ಅದು ಜ್ಯೂಬಿಲಿ ಸಂವತ್ಸರದಲ್ಲಿ ಯೆಹೋವನಿಗೆ ಮೀಸಲಾದದ್ದಾಗಿರುವುದು. ಅದು ಎಂದೆಂದಿಗೂ ಯಾಜಕನದ್ದಾಗಿರುವುದು. ಅದು ಪೂರ್ಣವಾಗಿ ಯೆಹೋವನಿಗೆ ಪ್ರತಿಷ್ಠಿಸಿದ ಭೂಮಿಯಂತೆ ಇರುವುದು.

22“ಒಬ್ಬನು ತಾನು ಕೊಂಡುಕೊಂಡ ಹೊಲವನ್ನು ಅಂದರೆ ಪಿತ್ರಾರ್ಜಿತ ಭೂಮಿಗೆ ಸೇರದಿರುವ ಹೊಲವನ್ನು ಯೆಹೋವನಿಗೆ ಪ್ರತಿಷ್ಠಿಸಿದರೆ,
23ಯಾಜಕನು ಮುಂದಿನ ಜ್ಯೂಬಿಲಿ ಸಂವತ್ಸರದವರೆಗೆ ಇರುವ ವರ್ಷಗಳನ್ನು ಲೆಕ್ಕ ಹಾಕಿ ಅದರ ಬೆಲೆಯನ್ನು ನಿಗಧಿ ಮಾಡಬೇಕು. ಆಗ ಭೂಮಿಯು ಯೆಹೋವನದಾಗಿರುವುದು.
24ಜ್ಯೂಬಿಲಿ ಸಂವತ್ಸರದಲ್ಲಿ, ಭೂಮಿಯು ಅದರ ಸ್ವಂತ ಮಾಲಿಕನಿಗೆ ಸೇರುವುದು. ಪಿತ್ರಾರ್ಜಿತ ಭೂಮಿಯು ಅದನ್ನು ಹೊಂದಿದ್ದ ಕುಟುಂಬಕ್ಕೆ ಸೇರುವುದು.

25“ನೀವು ಅಧಿಕೃತ ಅಳತೆಯನ್ನು* ಉಪಯೋಗಿಸಿ ಆ ಬೆಲೆಗಳನ್ನು ಕೊಡಬೇಕು. ಒಂದು ಶೆಕೆಲ್‌ನ ಬೆಲೆಯನ್ನು ಇಪ್ಪತ್ತು ಗೇರಾ ತೂಕದ ಪ್ರಕಾರ ನೀವು ಯಾವಾಗಲೂ ನಿರ್ಣಯಿಸಬೇಕು.

## ಪಶುಗಳ ಬೆಲೆ

26“ಜನರು ಯೆಹೋವನಿಗೆ ವಿಶೇಷ ಕಾಣಿಕೆಯಾಗಿ ದನಗಳನ್ನು ಮತ್ತು ಕುರಿಗಳನ್ನು ಕೊಡಬಹುದು. ಆದರೆ ಪಶುವು ಚೊಚ್ಚಲಾದದ್ದಾಗಿದ್ದರೆ, ಅದು ಈಗಾಗಲೇ ಯೆಹೋವನದ್ದಾಗಿರುತ್ತದೆ. ಆದ್ದರಿಂದ ಜನರು ಅಂಥ ಪಶುಗಳನ್ನು ಯೆಹೋವನಿಗೆ ವಿಶೇಷ ಕಾಣಿಕೆಯಾಗಿ ಕೊಡಲಾಗುವುದಿಲ್ಲ.
27ಜನರು ಚೊಚ್ಚಲಾದ ಪಶುಗಳನ್ನು ಯೆಹೋವನಿಗೆ ಕೊಡಬೇಕು. ಆದರೆ ಚೊಚ್ಚಲಾದ ಪಶುವು ಅಶುದ್ಧವಾದ ಪಶುವಾಗಿದ್ದರೆ, ಆಗ ಹರಕೆ ಮಾಡಿದವನು ಅದನ್ನು ಮರಳಿ ಕೊಂಡುಕೊಳ್ಳಬೇಕು. ಯಾಜಕನು ಅದರ ಬೆಲೆಯನ್ನು ನಿರ್ಣಯಿಸುವನು ಮತ್ತು ಹರಕೆ ಮಾಡಿದವನು ಆ ಬೆಲೆಗೆ ಐದನೆಯ ಒಂದಂಶವನ್ನು ಸೇರಿಸಬೇಕು. ಅವನು ಅದನ್ನು ಮರಳಿ ಕೊಂಡುಕೊಳ್ಳದಿದ್ದರೆ, ಆಗ ಯಾಜಕನು ತಾನು ನಿರ್ಣಯಿಸಿದ ಬೆಲೆಗೆ ಆ ಪಶುವನ್ನು ಮಾರಬೇಕು.

28“ಜನರು ಯೆಹೋವನಿಗೆ ಸಲ್ಲಿಸುವ ವಿಶೇಷ ಬಗೆಯ ಕಾಣಿಕೆಯು* ಯೆಹೋವನಿಗೆ ಮಾತ್ರ ಸೇರಿದ್ದಾಗಿರುತ್ತದೆ. ಅದನ್ನು ಬಿಡಿಸಿಕೊಳ್ಳುವುದಕ್ಕಾಗಲೀ ಮಾರುವುದಕ್ಕಾಗಲೀ ಆಗುವುದಿಲ್ಲ. ಅದು ಯೆಹೋವನದ್ದಾಗಿರುತ್ತದೆ. ಈ ಕಾಣಿಕೆಗಳು ಜನರನ್ನು, ಪಶುಗಳನ್ನು ಮತ್ತು ಪಿತ್ರಾರ್ಜಿತ ಸ್ವತ್ತುಗಳನ್ನು ಒಳಗೊಂಡಿದೆ.

29ಆ ವಿಶೇಷ ಬಗೆಯ ಕಾಣಿಕೆಯು ಒಬ್ಬ ವ್ಯಕ್ತಿಯಾಗಿದ್ದರೆ ಅವನನ್ನು ಮತ್ತೆ ಕೊಂಡುಕೊಳ್ಳಲು ಸಾಧ್ಯವಿಲ್ಲ. ಆ ವ್ಯಕ್ತಿಯು ಕೊಲ್ಲಲ್ಪಡಬೇಕು.

30“ಎಲ್ಲಾ ಬೆಳೆಗಳಲ್ಲಿ ಹತ್ತರಲ್ಲಿ ಒಂದಂಶವು ಯೆಹೋವನದ್ದಾಗಿರುತ್ತದೆ. ಹೊಲಗಳ ಬೆಳೆಗಳಾಗಲೀ ಮರಗಳ ಫಲಗಳಾಗಲೀ ಅದರಲ್ಲಿ ಹತ್ತರಲ್ಲಿ ಒಂದಂಶ ಯೆಹೋವನದ್ದಾಗಿರುತ್ತದೆ.
31ಆದ್ದರಿಂದ ಒಬ್ಬನು ತಾನು ಕೊಡಬೇಕಾದ ಹತ್ತನೆಯ ಪಾಲಿನಲ್ಲಿ ಏನಾದರೂ ಬಿಡಿಸಿಕೊಳ್ಳಬೇಕೆಂದಿದ್ದರೆ, ಅವನು ಅದರ ಬೆಲೆಗೆ ಐದನೆಯ ಒಂದಂಶವನ್ನು ಸೇರಿಸಿಕೊಟ್ಟು ಬಿಡಿಸಿಕೊಳ್ಳಬೇಕು.

32“ದನಗಳಲ್ಲಾಗಲೀ ಕುರಿಗಳಲ್ಲಾಗಲೀ ಪ್ರತಿ ಹತ್ತನೆಯ ಪಾಲನ್ನು ಯಾಜಕರು ತೆಗೆದುಕೊಳ್ಳುವರು. ಪ್ರತಿ ಹತ್ತನೆ ಪಶು ಯೆಹೋವನದಾಗಿರುವುದು.
33ಆರಿಸಲ್ಪಟ್ಟ ಪಶುವು ಒಳ್ಳೆಯದೋ ಕೆಟ್ಟದೋ ಎಂದು ಅದರ ಮಾಲಿಕನು ಚಿಂತೆ ಮಾಡಬಾರದು. ಅವನು ಅದನ್ನು ಬದಲಾಯಿಸಬಾರದು. ಅವನು ಅದನ್ನು ಬದಲಾಯಿಸಲು ತೀರ್ಮಾನಿಸಿದರೆ, ಆಗ ಎರಡು ಪಶುಗಳು ಯೆಹೋವನದಾಗುತ್ತವೆ. ಆ ಪಶುವನ್ನು ಬಿಡಿಸಿಕೊಳ್ಳಲಾಗದು.”

34ಯೆಹೋವನು ಸೀನಾಯಿ ಬೆಟ್ಟದಲ್ಲಿ ಮೋಶೆಯ ಮೂಲಕ ಇಸ್ರೇಲರಿಗೆ ಕೊಟ್ಟ ಆಜ್ಞೆಗಳು ಇವೇ.

---

**ಅಧಿಕೃತ ಅಳತೆ** ಅಕ್ಷರಶಃ “ ಪವಿತ್ರ ಶೆಕೆಲ್ ” ದೇವದರ್ಶನ ಗುಡಾರದಲ್ಲಿ ಉಪಯೋಗಿಸುತ್ತಿದ್ದ ಅಧಿಕೃತವಾದ ಅಳತೆಮಾನ.

**ವಿಶೇಷ ಬಗೆಯ ಕಾಣಿಕೆ** ಇದು ಸಾಮಾನ್ಯವಾಗಿ ಯುದ್ಧದಲ್ಲಿ ತೆಗೆದುಕೊಂಡ ವಸ್ತುಗಳನ್ನು ಸೂಚಿಸುತ್ತದೆ. ಆ ವಸ್ತುಗಳು ಯೆಹೋವನಿಗೆ ಮಾತ್ರ ಸೇರಿದವುಗಳಾದ್ದರಿಂದ, ಅವುಗಳನ್ನು ಬೇರೆ ಯಾವುದಕ್ಕೂ ಉಪಯೋಗಿಸಲು ಸಾಧ್ಯವಿರಲಿಲ್ಲ.

# ಅರಣ್ಯಕಾಂಡ

## ಮೋಶೆಯು ಇಸ್ರೇಲರನ್ನು ಲೆಕ್ಕಿಸಿದ್ದು

1 ಯೆಹೋವನು ದೇವದರ್ಶನ ಗುಡಾರದೊಳಗೆ
ಮೋಶೆಯೊಡನೆ ಮಾತಾಡಿದನು. ಆಗ ದೇವ
ದರ್ಶನಗುಡಾರವು ಸೀನಾಯಿ ಮರುಭೂಮಿಯಲ್ಲಿತ್ತು.
ಇಸ್ರೇಲರು ಈಜಿಪ್ಟನ್ನು ಬಿಟ್ಟ ಎರಡನೆಯ ವರ್ಷದ
ಎರಡನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಇದು
ನಡೆಯಿತು. ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[2]‘‘ಇಸ್ರೇಲ್ ಜನರೆಲ್ಲರನ್ನು ಅವರವರ ಗೋತ್ರ
ಕುಟುಂಬಗಳ ಪ್ರಕಾರ ಲೆಕ್ಕಿಸಿ ಪ್ರತಿಯೊಬ್ಬನ ಹೆಸರನ್ನೂ
ಪಟ್ಟಿಮಾಡಿ [3]ನೀನೂ ಆರೋನನೂ ಇಸ್ರೇಲರಲ್ಲಿ ಎಲ್ಲಾ
ಪುರುಷರನ್ನು ಲೆಕ್ಕಿಸಬೇಕು. ಇಸ್ರೇಲ್ ಸೈನ್ಯದಲ್ಲಿ ಸೇವೆ
ಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದಕ್ಕಿಂತ
ಮೇಲ್ಪಟ್ಟ ವಯಸ್ಸುಳ್ಳ ಪುರುಷರನ್ನು ಲೆಕ್ಕಿಸು. ಅವರನ್ನು
ಅವರವರ ವಿಭಾಗಗಳಿಗೆ ಅನುಸಾರವಾಗಿ ಪಟ್ಟಿಮಾಡು.
[4]ಪ್ರತಿಯೊಂದು ಕುಲದ ಕುಟುಂಬದ ನಾಯಕನು ನಿಮಗೆ
ಸಹಾಯ ಮಾಡಬೇಕು. [5]ನಿಮ್ಮೊಡನಿದ್ದು ನಿಮಗೆ
ಸಹಾಯಮಾಡುವ ಪುರುಷರು ಯಾರೆಂದರೆ :

ರೂಬೇನನ ಕುಲದಿಂದ ಶೆದೇಯೂರನ
ಮಗನಾದ ಎಲೀಚೂರ್.

6 ಸಿಮೆಯೋನನ ಕುಲದಿಂದ ಚೂರೀಷದ್ದೈಯ
ಮಗನಾದ ಶೆಲುಮೀಯೇಲ್;

7 ಯೆಹೂದನ ಕುಲದಿಂದ ಅಮ್ಮೀನಾದಾಬನ
ಮಗನಾದ ನಹಶೋನ್;

8 ಇಸ್ಸಾಕಾರನ ಕುಲದಿಂದ ಚೂವಾರನ ಮಗನಾದ
ನೆತನೇಲ್;

9 ಜೆಬುಲೂನ್ ಕುಲದಿಂದ ಹೇಲೋನನ
ಮಗನಾದ ಎಲೀಯಾಬ್;

10 ಎಫ್ರಾಯೀಮನ ಕುಲದಿಂದ ಅಮ್ಮೀಹೂದನ
ಮಗನಾದ ಎಲೀಷಾಮಾ; (ಎಫ್ರಾಯೀಮನು
ಯೋಸೇಫನ ಮಗನು.) ಮನಸ್ಸೆಯ ಕುಲದಿಂದ
ಪೆದಾಚೂರನ ಮಗನಾದ ಗಮ್ಲೀಯೇಲ್
(ಮನಸ್ಸೆಯೂ ಯೋಸೇಫನ ಮಗನು);

11 ಬೆನ್ಯಾಮೀನನ ಕುಲದಿಂದ ಗಿದ್ಯೋನನ
ಮಗನಾದ ಅಬೀದಾನ್;

12 ದಾನ್ ಕುಲದಿಂದ ಅಮ್ಮೀಷದ್ದೈಯ ಮಗನಾದ
ಅಹೀಗೆಜೆರ್;

13 ಅಶೇರನ ಕುಲದಿಂದ ಒಕ್ರಾನನ ಮಗನಾದ
ಪಗೀಯೇಲ್;

14 ಗಾದನ ಕುಲದಿಂದ ರೆಗೂವೇಲನ ಮಗನಾದ
ಎಲ್ಯಾಸಾಫ್;

15 ನಫ್ತಾಲಿಯ ಕುಲದಿಂದ ಏನಾನನ ಮಗನಾದ
ಅಹೀರ.’’

[16]ಸರ್ವಸಮೂಹದವರೊಳಗಿಂದ ಆರಿಸಲ್ಪಟ್ಟಿದ್ದ
ಇವರು ತಮ್ಮ ಪೂರ್ವಿಕರ ಕುಲಗಳಿಗೆ ನಾಯಕರಾಗಿ
ದ್ದರು. [17]ಹೆಸರೆಸರಾಗಿ ಆರಿಸಲ್ಪಟ್ಟ ಈ ಜನರನ್ನು ಮೋಶೆ
ಆರೋನರು ತೆಗೆದುಕೊಂಡರು. [18]ಎರಡನೆ ತಿಂಗಳಿನ
ಮೊದಲನೆ ದಿನದಲ್ಲಿ ಎಲ್ಲಾ ಜನರು ಒಟ್ಟಾಗಿ ಸೇರಿ
ಬಂದರು. ಜನರು ತಮ್ಮತಮ್ಮ ಕುಟುಂಬಗಳಿಗನು
ಸಾರವಾಗಿ, ಗೋತ್ರಗಳಿಗನುಸಾರವಾಗಿ ಪಟ್ಟಿ ಮಾಡಿಸಿ
ದರು. ಇಪ್ಪತ್ತು ವರ್ಷ ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ
ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ ಮಾಡಲಾಯಿತು.
[19]ಯೆಹೋವನು ಆಜ್ಞಾಪಿಸಿದ ಪ್ರಕಾರವೇ ಮೋಶೆಯು
ಮಾಡಿದನು. ಜನರು ಸೀನಾಯಿ ಮರುಭೂಮಿ
ಯಲ್ಲಿದ್ದಾಗ ಮೋಶೆಯು ಅವರನ್ನು ಲೆಕ್ಕಿಸಿದನು.
[20]ಅವರು ರೂಬೇನನ ಕುಲದವರನ್ನು ಲೆಕ್ಕಿಸಿದರು.
(ರೂಬೇನನು ಇಸ್ರೇಲನ ಚೊಚ್ಚಲು ಮಗನು.) ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಹೆಚ್ಚು ವಯಸ್ಸಾದ ಎಲ್ಲಾ ಪುರುಷರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. ಅವರವರ ಕುಲಗಳಿ
ಗನುಸಾರವಾಗಿ ಮತ್ತು ಕುಟುಂಬಗಳಿಗನುಸಾರವಾಗಿ
ಹೆಸರುಗಳನ್ನು ಪಟ್ಟಿಮಾಡಲಾಯಿತು. [21]ರೂಬೇನನ
ಕುಲದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 46,500.
[22]ಅವರು ಸಿಮೆಯೋನನ ಕುಲದವರನ್ನು ಲೆಕ್ಕಿಸಿದರು.
ಸೈನ್ಯದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ

ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ
ಮತ್ತು ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 23ಸಿಮೆಯೋನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 59,300.

24ಗಾದನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿ ಮತ್ತು ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 25ಗಾದನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 45,650.

26 ಯೆಹೂದನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿಯೂ ಕುಟುಂಬಗಳಿಗನುಸಾರವಾಗಿಯೂ ಅವರ
ಹೆಸರುಗಳನ್ನು ಪಟ್ಟಿಮಾಡಲಾಯಿತು.

27ಯೆಹೂದನ ಕುಲದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು
ಸಂಖ್ಯೆ 74,600.

28ಇಸ್ಸಾಕಾರನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 29ಇಸ್ಸಾಕಾರನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 54,400.

30ಜೆಬುಲೂನನ ಕುಲದವರನ್ನು ಲೆಕ್ಕಿಸಿದರು. ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 31ಜೆಬುಲೂನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 57,400.

32ಎಫ್ರಾಯೀಮನ ಕುಲದವರನ್ನು ಲೆಕ್ಕಿಸಿದರು.
(ಎಫ್ರಾಯೀಮನು ಯೋಸೇಫನ ಮಗನು.) ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು
ಪಟ್ಟಿಮಾಡಲಾಯಿತು. 33ಎಫ್ರಾಯೀಮನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 40,500.

34ಮನಸ್ಸೆಯ ಕುಲದವರನ್ನು ಲೆಕ್ಕಿಸಿದರು.
(ಮನಸ್ಸೆಯು ಸಹ ಯೋಸೇಫನ ಮಗನು.) ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 35 ಮನಸ್ಸೆಯ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 32,200.

36ಬೆನ್ಯಾಮೀನನ ಕುಲದವರನ್ನು ಲೆಕ್ಕಿಸಿದರು. ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 37ಬೆನ್ಯಾಮೀನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 35,400.

38ದಾನನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 39ದಾನನ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 62,700.

40ಆಶೇರನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 41ಆಶೇರನ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 41,500.

42ನಫ್ತಾಲಿಯ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 43ನಫ್ತಾಲಿಯ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 53,400.

44ಮೋಶೆ, ಆರೋನ ಮತ್ತು ಇಸ್ರೇಲರ ಹನ್ನೆರಡು
ನಾಯಕರು ಈ ಜನರನ್ನು ಲೆಕ್ಕಿಸಿದರು. (ಪ್ರತಿಯೊಬ್ಬ
ನಾಯಕನು ತನ್ನ ಕುಲದ ಪ್ರತಿನಿಧಿಯಾಗಿದ್ದನು.)
45ಅವರು ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ
ಮತ್ತು ಅದಕ್ಕಿಂತ ಮೇಲ್ಪಟ್ಟ ಪ್ರತಿ ಪುರುಷನನ್ನು
ಲೆಕ್ಕಿಸಿದರು. ಪ್ರತಿಯೊಬ್ಬನೂ ಅವನ ಕುಟುಂಬದೊಡನೆ

ಲೆಕ್ಕಿಸಲ್ಪಟ್ಟನು. 46ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ
603,550.

47ಲೇವಿ ಕುಲದ ಕುಟುಂಬಗಳು ಇತರ ಇಸ್ರೇಲ
ರೊಡನೆ ಲೆಕ್ಕಿಸಲ್ಪಡಲಿಲ್ಲ. 48ಯಾಕಂದರೆ ಯೆಹೋವನು
ಮೋಶೆಗೆ ಹೇಳಿದ್ದೇನೆಂದರೆ, 49“ಲೇವಿ ಕುಲದ ಪುರುಷ
ರನ್ನು ಲೆಕ್ಕಿಸಬೇಡ. ಅವರನ್ನು ಉಳಿದ ಇಸ್ರೇಲರ ಜನ
ಗಣತಿಯೊಡನೆ ಸೇರಿಸಬಾರದು. 50ಒಡಂಬಡಿಕೆಯ
ಪವಿತ್ರಗುಡಾರವನ್ನು ನೋಡಿಕೊಳ್ಳುವ ಜವಾಬ್ದಾರಿಯು
ಲೇವಿಯರಿಗೆ ಸೇರಿರುವುದರಿಂದ ಅವರಿಗೆ ಅದನ್ನು
ತಿಳಿಸು. ಅವರು ಅದನ್ನೂ ಅದರ ಉಪಕರಣಗಳನ್ನೂ
ಮತ್ತು ಅದಕ್ಕೆ ಸಂಬಂಧಿಸಿದ ಪ್ರತಿಯೊಂದನ್ನೂ ನೋಡಿ
ಕೊಳ್ಳಬೇಕು. ಅವರು ಪವಿತ್ರಗುಡಾರವನ್ನೂ ಅದ
ರಲ್ಲಿರುವ ಪ್ರತಿಯೊಂದನ್ನೂ ಹೊತ್ತುಕೊಂಡು ಹೋಗ
ಬೇಕು. ಅವರು ಅದರ ಸುತ್ತಲೂ ಪಾಳೆಯ ಮಾಡಿ
ಕೊಂಡು ಅದನ್ನು ನೋಡಿಕೊಳ್ಳಬೇಕು. 51ಪವಿತ್ರ
ಗುಡಾರವನ್ನು ತೆಗೆದುಕೊಂಡು ಹೋಗುವಾಗಲೆಲ್ಲಾ
ಲೇವಿಯರೇ ಅದನ್ನು ಬಿಚ್ಚಬೇಕು, ಇಳಿಸುವಾಗಲೆಲ್ಲಾ
ಲೇವಿಯರೇ ಅದನ್ನು ಹಾಕಬೇಕು. ಪವಿತ್ರಗುಡಾರವನ್ನು
ನೋಡಿಕೊಳ್ಳುವವರು ಅವರೇ. ಲೇವಿ ಕುಲಕ್ಕೆ ಸೇರದ
ಯಾವನಾದರೂ ಅದರ ಸಮೀಪಕ್ಕೆ ಬಂದರೆ, ಅವನಿಗೆ
ಮರಣಶಿಕ್ಷೆಯಾಗಬೇಕು. 52ಇಸ್ರೇಲರ ಆಯಾ ದಂಡು
ಗಳು ತಮ್ಮ ಕುಲದ ಧ್ವಜ ಇರುವಲ್ಲಿಯೇ ಪಾಳೆಯ ಮಾಡಿ
ಕೊಳ್ಳಬೇಕು. 53ಆದರೆ ಲೇವಿಯರು ಪವಿತ್ರಗುಡಾರದ
ಸುತ್ತಲೂ ತಮ್ಮ ಪಾಳೆಯ ಮಾಡಿಕೊಳ್ಳಬೇಕು. ಹೀಗೆ
ಲೇವಿಯರು ಒಡಂಬಡಿಕೆಯ ಪವಿತ್ರಗುಡಾರವನ್ನು
ಕಾಯುವರು; ಇಸ್ರೇಲರಿಗೆ ಯಾವ ಕೇಡೂ ಸಂಭವಿಸ
ದಂತೆ ಅವರು ಪವಿತ್ರಗುಡಾರವನ್ನು ಸಂರಕ್ಷಿಸುವರು.”

54ಹೀಗೆ ಯೆಹೋವನು ಮೋಶೆಗೆ ಆಜ್ಞಾಪಿಸಿದ್ದ
ಪ್ರತಿಯೊಂದನ್ನು ಇಸ್ರೇಲರು ಮಾಡಿದರು.

## ಪಾಳೆಯ ಮಾಡಿಕೊಳ್ಳುವ ಕ್ರಮ

2 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇ
ನೆಂದರೆ: 2“ಇಸ್ರೇಲರು ದೇವದರ್ಶನ ಗುಡಾರದ
ಸುತ್ತಲೂ ಸ್ವಲ್ಪ ದೂರದಲ್ಲಿ ತಮ್ಮ ಡೇರೆಗಳನ್ನು ಹಾಕಿ
ಕೊಳ್ಳಬೇಕು. ಪ್ರತಿಯೊಬ್ಬನು ತನ್ನತನ್ನ ಗೋತ್ರ ಧ್ವಜದ
ಹತ್ತಿರ ತನ್ನ ದಂಡಿನಲ್ಲೇ ಇಳಿದುಕೊಳ್ಳಬೇಕು.

3“ವಿಭಾಗಗಳಿಗನುಸಾರವಾಗಿ ತಮ್ಮ ಸ್ವಂತ ಧ್ವಜಗ
ಳೊಡನೆ ಮುನ್ನಡೆಯುವ ಯೆಹೂದ ಮತ್ತು ಅದರ
ಗೋತ್ರಗಳವರು ದೇವದರ್ಶನಗುಡಾರದ ಪೂರ್ವ ದಿಕ್ಕಿ
ನಲ್ಲಿ ಪಾಳೆಯ ಮಾಡಿಕೊಳ್ಳಬೇಕು. ಯೆಹೂದ ಕುಲ
ದವರ ನಾಯಕನು ಅಮ್ಮೀನಾದಾಬನ ಮಗನಾದ
ನಹಶೋನ. 4ಅವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 74,600
ಮಂದಿ.

5“ಇಸ್ಸಾಕಾರನ ಕುಲದವರು ಯೆಹೂದ ಕುಲದವರ
ನಂತರ ಪಾಳೆಯ ಹಾಕುವರು. ಇಸ್ಸಾಕಾರನ ಕುಲದವರ
ನಾಯಕನು ಚೂವಾರನ ಮಗನಾದ ನೆತನೇಲ. 6ಅವರಲ್ಲಿ
ಲೆಕ್ಕಿಸಲ್ಪಟ್ಟ ಸೈನಿಕರು 54,400 ಮಂದಿ.

7“ಜೆಬುಲೂನ ಕುಲದವರು ಸಹ ಯೆಹೂದ ಕುಲ
ದವರ ನಂತರ ಪಾಳೆಯ ಹಾಕುವರು. ಜೆಬುಲೂನ್
ಕುಲದ ನಾಯಕನು ಹೇಲೋನನ ಮಗನಾದ
ಎಲೀಯಾಬ್. 8ಅವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 57,400
ಮಂದಿ. 9“ಯೆಹೂದ ಪಾಳೆಯದಲ್ಲಿ ಮತ್ತು
ಅದರೊಡನೆ ಮುನ್ನಡೆಯುವ ಗೋತ್ರಗಳವರ ಒಟ್ಟು
ಸೈನಿಕರು 186,400 ಮಂದಿ. ಇವರೆಲ್ಲರು ವಿಭಾಗ
ಗಳಿಗನುಸಾರವಾಗಿ ತಮ್ಮ ಹೆಸರುಗಳನ್ನು ನೊಂದಾಯಿಸಿ
ಕೊಂಡವರು. ಇಸ್ರೇ ಲರು ಒಂದು ಸ್ಥಳದಿಂದ ಇನ್ನೊಂದು
ಸ್ಥಳಕ್ಕೆ ಪ್ರಯಾಣಮಾಡುವಾಗ, ಯೆಹೂದ (ಮತ್ತು ಅದ
ರೊಂದಿಗಿರುವ ಎರಡು ಕುಲಗಳವರು) ಮೊದಲು
ಹೊರಡುವರು.

10“ರೂಬೇನ್ ಕುಲ ಮತ್ತು ಅದರೊಡನೆ ಮುನ್ನಡೆ
ಯುವ ಕುಲಗಳು ದೇವದರ್ಶನಗುಡಾರದ ದಕ್ಷಿಣ ದಿಕ್ಕಿ
ನಲ್ಲಿ ತಮ್ಮ ಧ್ವಜಗಳೊಡನೆ ವಿಭಾಗಗಳಿಗನುಸಾರವಾಗಿ
ಪಾಳೆಯಮಾಡಿಕೊಳ್ಳಬೇಕು. ರೂಬೇನ್ ಕುಲದವರ
ನಾಯಕನು ಶೆದೇಯೂರನ ಮಗನಾದ ಎಲೀಚೂರನು;
11ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 46,500 ಮಂದಿ.

12“ರೂಬೇನ್ ಕುಲದವರ ಪಕ್ಕದಲ್ಲಿ ಸಿಮೆಯೋನ್
ಕುಲದವರು ಪಾಳೆಯ ಹಾಕುವರು. ಸಿಮೆಯೋನ್
ಕುಲದವರ ನಾಯಕನು ಚೂರೀಷದ್ದೈನ ಮಗನಾದ
ಶೆಲುಮೀಯೇಲ. 13ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು
59,300 ಮಂದಿ.

14“ಗಾದನ ಕುಲವು ಸಹ ರೂಬೇನ್ ಕುಲದ ಪಕ್ಕದಲ್ಲಿ
ಪಾಳೆಯ ಮಾಡಿಕೊಳ್ಳಬೇಕು. ಗಾದನ ಕುಲದವರ
ನಾಯಕನು ರೆಗೂವೇಲನ ಮಗನಾದ ಎಲ್ಯಾಸಾಫ್.
15ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 45,650 ಮಂದಿ.

16“ರೂಬೇನನ ಪಾಳೆಯದಲ್ಲಿರುವ ಎಲ್ಲಾ ತಂಡ
ಗಳಲ್ಲಿರುವ ಒಟ್ಟು ಸೈನಿಕರು 1,51,450 ಮಂದಿ. ಇವ
ರೆಲ್ಲರೂ ವಿಭಾಗಗಳಿಗನುಸಾರವಾಗಿ ಹೆಸರನ್ನು ನೊಂದಾ
ಯಿಸಿಕೊಂಡವರು. ಇಸ್ರೇಲರು ಒಂದು ಸ್ಥಳದಿಂದ
ಇನ್ನೊಂದು ಸ್ಥಳಕ್ಕೆ ಪ್ರಯಾಣಮಾಡುವಾಗ ರೂಬೇನ್
ಕುಲವು ಮತ್ತು ಅದರ ನಂತರದಲ್ಲಿರುವ ಎರಡು ಕುಲ
ಗಳವರು ಎರಡನೆಯದಾಗಿ ಹೊರಡುವರು.

17“ಇಸ್ರೇಲರು ಪ್ರಯಾಣಮಾಡುವಾಗ ಅವರ ನಂತರ
ಹೊರಡುವ ತಂಡದವರೇ ಲೇವಿ ಕುಲದವರು. ಇತರ

ಪಾಳೆಯಗಳ ಮಧ್ಯೆ ದೇವದರ್ಶನಗುಡಾರವು ಅವ
ರೊಡನೆ ಇರುವುದು. ಅವರು ತಾವು ಪಾಳೆಯ ಮಾಡಿ
ಕೊಂಡ ಕ್ರಮಾನುಸಾರವಾಗಿ ತಮ್ಮ ಧ್ವಜಗಳೊಡನೆ
ಮುನ್ನಡೆಯುವರು.

18‘‘ಎಫ್ರಾಯೀಮ್ ಕುಲದವರು ಮತ್ತು ಅವರೊಡನೆ
ಮುನ್ನಡೆಯುವ ಕುಲಗಳವರು ದೇವದರ್ಶನಗುಡಾರದ
ಪಶ್ಚಿಮದಿಕ್ಕಿನಲ್ಲಿ ತಮ್ಮ ಧ್ವಜಗಳೊಡನೆ ವಿಭಾಗಗಳಿಗನು
ಸಾರವಾಗಿ ಪಾಳೆಯ ಮಾಡಬೇಕು. ಎಫ್ರಾಯೀಮರ
ಕುಲದವರ ನಾಯಕನು ಅಮ್ಮೀಹೂದನ ಮಗನಾದ
ಎಲೀಷಾಮ. 19ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 40,500
ಮಂದಿ.

20‘‘ಮನಸ್ಸೆ ಕುಲದವರು ಎಫ್ರಾಯೀಮ್ ಕುಲದವರ
ಪಕ್ಕದಲ್ಲಿ ಪಾಳೆಯ ಹಾಕುವರು. ಮನಸ್ಸೆ ಕುಲದವರ
ನಾಯಕನು ಪೆದಾಚೂರನ ಮಗನಾದ ಗಮ್ಲೀಯೇಲ.
21ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 32,200 ಮಂದಿ.

22‘‘ಬೆನ್ಯಾಮೀನನ ಕುಲವು ಸಹ ಎಫ್ರಾಯೀಮ್
ಕುಲದ ಪಕ್ಕದಲ್ಲಿ ಪಾಳೆಯ ಹಾಕುವರು. ಬೆನ್ಯಾಮೀನ್
ಕುಲದವರ ನಾಯಕನು ಗಿದ್ಯೋನನ ಮಗನಾದ
ಅಬೀದಾನನು. 23ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 35,400
ಮಂದಿ.

24‘‘ಎಫ್ರಾಯೀಮರ ಪಾಳೆಯದಲ್ಲಿರುವ ಸೈನಿಕರು
1,08,100 ಮಂದಿ. ಇವರೆಲ್ಲರು ತಮ್ಮ ವಿಭಾಗಗಳಿಗನು
ಸಾರವಾಗಿ ಹೆಸರನ್ನು ನೊಂದಾಯಿಸಿಕೊಂಡವರು.
ಜನರು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪ್ರಯಾಣ
ಮಾಡುವಾಗ ಎಫ್ರಾಯೀಮರ ಕುಲದವರು ಮತ್ತು
ಅವರ ನಂತರದಲ್ಲಿರುವ ಎರಡು ಕುಲಗಳವರು
ಮೂರನೆಯ ಗುಂಪಾಗಿ ಹೊರಡುವರು.

25‘‘ದಾನ್ ಕುಲದವರು ಮತ್ತು ಅವರೊಡನೆ
ಮುನ್ನಡೆಯುವ ಕುಲಗಳು ದೇವದರ್ಶನಗುಡಾರದ
ಉತ್ತರದಿಕ್ಕಿನಲ್ಲಿ ತಮ್ಮ ಧ್ವಜದೊಡನೆ ವಿಭಾಗಗಳಿ
ಗನುಸಾರವಾಗಿ ಪಾಳೆಯ ಮಾಡಬೇಕು. ದಾನ್ ಕುಲದ
ನಾಯಕನು ಅಮ್ಮೀಷದ್ದೈಯನ ಮಗನಾದ
ಅಹೀಗೆಜೆರ್. 26ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 62,700
ಮಂದಿ.

27ಆಶೇರ್ ಕುಲದವರು ದಾನ್ ಕುಲದ ಪಕ್ಕದಲ್ಲಿ
ಪಾಳೆಯ ಹಾಕಬೇಕು. ಆಶೇರ್ ಕುಲದವರ ನಾಯಕನು
ಒಕ್ರಾನನ ಮಗನಾದ ಪಗೀಯೇಲ. 28ಇವರಲ್ಲಿ ಲೆಕ್ಕಿಸ
ಲ್ಪಟ್ಟ ಸೈನಿಕರು 41,500 ಮಂದಿ.

29‘‘ನಫ್ತಾಲಿ ಕುಲದವರು ಸಹ ದಾನ್ ಕುಲದ ಪಕ್ಕದಲ್ಲಿ
ಪಾಳೆಯ ಹಾಕಬೇಕು. ನಫ್ತಾಲಿ ಕುಲದವರ ನಾಯಕನು
ಏನಾನನ ಮಗನಾದ ಅಹೀರ. 30ಇವರಲ್ಲಿ ಲೆಕ್ಕಿಸಲ್ಪಟ್ಟ
ಸೈನಿಕರು 53,400 ಮಂದಿ.

31‘‘ದಾನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು
1,57,600 ಮಂದಿ. ಇಸ್ರೇಲರು ಸ್ಥಳದಿಂದ ಸ್ಥಳಕ್ಕೆ
ಪ್ರಯಾಣಮಾಡುವಾಗ ದಾನ್ ಕುಲದವರು ಮತ್ತು
ಅವರೊಂದಿಗಿರುವ ಎರಡು ಕುಲಗಳವರು ಕೊನೆಯಲ್ಲಿ
ತಮ್ಮ ಧ್ವಜಗಳೊಡನೆ ಮುನ್ನಡೆಯುವರು.’’

32ತಮ್ಮ ಕುಟುಂಬಗಳಿಗನುಸಾರವಾಗಿ ಹೆಸರನ್ನು
ನೊಂದಾಯಿಸಿಕೊಂಡ ಇಸ್ರೇಲರು ಇವರೇ. ಅವರ
ವಿಭಾಗಗಳಿಗನುಸಾರವಾಗಿ ಪಾಳೆಯದಲ್ಲಿ ಲೆಕ್ಕಿಸಲ್ಪಟ್ಟ
ಇಸ್ರೇಲರ ಸೈನಿಕರ ಸಂಖ್ಯೆ 6,03,550 ಮಂದಿ.
33ಯೆಹೋವನ ಆಜ್ಞೆಯ ಪ್ರಕಾರ ಮೋಶೆಯು ಲೇವಿ
ಯರನ್ನು ಇತರ ಇಸ್ರೇಲರೊಂದಿಗೆ ಲೆಕ್ಕಿಸಲಿಲ್ಲ.

34ಹೀಗೆ ಯೆಹೋವನು ಮೋಶೆಗೆ ಹೇಳಿದ ಪ್ರತಿ
ಯೊಂದನ್ನು ಇಸ್ರೇಲರು ಮಾಡಿದರು. ತಮ್ಮ ಕ್ರಮಕ್ಕನು
ಸಾರವಾಗಿ ಅವರು ಪಾಳೆಯ ಮಾಡಿಕೊಂಡರು. ನೇಮಕ
ವಾದ ಪ್ರಕಾರವೇ ಪ್ರಯಾಣ ಮಾಡುತ್ತಿದ್ದರು; ಪ್ರತಿ
ಯೊಬ್ಬನು ತನ್ನ ಸ್ವಂತ ಕುಲದೊಡನೆಯೂ ಕುಟುಂಬ
ದೊಡನೆಯೂ ಇದ್ದನು.

### ಯಾಜಕರಾದ ಆರೋನನ ಕುಟುಂಬ

3 ಯೆಹೋವನು ಸೀನಾಯಿ ಬೆಟ್ಟದಲ್ಲಿ ಮೋಶೆ
ಯೊಡನೆ ಮಾತಾಡಿದ ಸಮಯದಲ್ಲಿದ್ದ ಆರೋನ
ಮತ್ತು ಮೋಶೆಯ ಸಂತತಿಗಳವರು ಇವರೇ. 2ಆರೋನ
ನಿಗೆ ನಾಲ್ಕು ಮಂದಿ ಗಂಡುಮಕ್ಕಳಿದ್ದರು. ನಾದಾಬನು
ಚೊಚ್ಚಲ ಮಗ. ಅನಂತರ ಹುಟ್ಟಿದವರು ಅಬೀಹು,
ಎಲ್ಲಾಜಾರ್ ಮತ್ತು ಈತಾಮಾರ್. 3ಈ ಗಂಡುಮಕ್ಕಳು
ಯಾಜಕರಾಗಿ ಸೇವೆಮಾಡಲು ಅಭಿಷೇಕಿಸಲ್ಪಟ್ಟವ
ರಾಗಿದ್ದರು ಮತ್ತು ಪ್ರತಿಷ್ಠಿತರಾದವರಾಗಿದ್ದರು.

4ಆದರೆ ನಾದಾಬ್ ಮತ್ತು ಅಬೀಹು ಎಂಬಿಬ್ಬರು
ಯೆಹೋವನ ಸೇವೆಮಾಡುತ್ತಿದ್ದಾಗ ಪಾಪಮಾಡಿದ್ದರಿಂದ
ಸತ್ತರು. ಅವರು ಯೆಹೋವನಿಗೆ ಧೂಪವನ್ನು ಸಮರ್ಪಿ
ಸುವಾಗ ಯೆಹೋವನು ಅಪ್ಪಣೆ ಕೊಡದೆ ಇದ್ದ ಬೆಂಕಿ
ಯನ್ನು ಉಪಯೋಗಿಸಿದರು. ಇದು ಸೀನಾಯಿ
ಮರುಭೂಮಿಯಲ್ಲಿ ನಡೆಯಿತು. ಆದ್ದರಿಂದ ನಾದಾಬ್
ಮತ್ತು ಅಬೀಹೂ ಅಲ್ಲಿ ಸತ್ತರು. ಅವರಿಗೆ ಗಂಡು
ಮಕ್ಕಳಿಲ್ಲದ್ದರಿಂದ ಎಲ್ಲಾಜಾರನು ಮತ್ತು ಈತಾಮಾರನು
ಅವರ ತಂದೆಯಾದ ಆರೋನನ ಕೈಕೆಳಗೆ ಯೆಹೋವನ
ಸೇವೆಮಾಡಿದರು.

### ಯಾಜಕರ ಸಹಾಯಕರಾದ ಲೇವಿಯರು

5ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, 6‘‘ಲೇವಿ
ಕುಲದವರನ್ನು ಯಾಜಕನಾದ ಆರೋನನ ಬಳಿಗೆ ಕರೆದು
ಕೊಂಡು ಬಾ. ಅವರು ಆರೋನನಿಗೆ ಸಹಾಯಕ

ರಾಗಿರುವರು. 7ಲೇವಿಯರು ಅವನಿಗಾಗಿ ಮತ್ತು ಇಡೀ
ಸಮೂಹಕ್ಕಾಗಿ ದೇವದರ್ಶನಗುಡಾರದ ಮುಂದೆ
ಕಾವಲುಗಾರರಾಗಿರುವರು ಮತ್ತು ದೇವದರ್ಶನ
ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸಗಳನ್ನು
ಮಾಡುವರು. 8ದೇವದರ್ಶನಗುಡಾರವು (ಚಲಿಸುತ್ತಿರು
ವಾಗ) ಲೇವಿಯರು ದೇವದರ್ಶನ ಗುಡಾರಕ್ಕೆ ಸಂಬಂಧಿ
ಸಿದ ಭಾರವಾದ ಕೆಲಸಗಳನ್ನು ಮಾಡುವುದಲ್ಲದೆ, ದೇವ
ದರ್ಶನಗುಡಾರದ ಎಲ್ಲಾ ಉಪಕರಣಗಳನ್ನು ಇಸ್ರೇಲರಿ
ಗೋಸ್ಕರ ಕಾಯಬೇಕು.

9“ಲೇವಿಯರನ್ನು ಆರೋನನಿಗೂ ಅವನ ಪುತ್ರರಿಗೂ
ಕೊಡು. ಲೇವಿಯರು ಇಸ್ರೇಲರ ಮಧ್ಯದಿಂದ ಆರೋನ
ನಿಗೋಸ್ಕರವಾಗಿ ಪ್ರತಿಷ್ಠಿತರಾಗಿದ್ದಾರೆ.

10“ಆರೋನನನ್ನೂ ಅವನ ಪುತ್ರರನ್ನೂ ಯಾಜಕ
ರನ್ನಾಗಿ ನೇಮಿಸು. ಅವರು ತಮ್ಮ ಯಾಜಕೋದ್ಯೋಗ
ವನ್ನು ಕಾಪಾಡಿಕೊಳ್ಳಬೇಕು. ಯಾಜಕರ ಕರ್ತವ್ಯಗಳನ್ನು
ಮಾಡಲು ಪವಿತ್ರ ವಸ್ತುಗಳ ಬಳಿಗೆ ಬರಲು ಬೇರೆ ಯಾವ
ನಾದರೂ ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡಬೇಕು.”
11ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
12“ಇಸ್ರೇಲಿನ ಪ್ರತಿ ಕುಟುಂಬವು ತನ್ನ ಚೊಚ್ಚಲ ಮಗ
ನನ್ನು ನನಗೆ ಕೊಡಬೇಕೆಂದು ನಿನಗೆ ಹೇಳಿದ್ದೆ. ಆದರೆ
ನನ್ನ ಸೇವೆಮಾಡುವುದಕ್ಕೆ ಈಗ ನಾನು ಲೇವಿಯರನ್ನು
ಆರಿಸಿಕೊಂಡಿದ್ದೇನೆ. ಅವರು ನನ್ನವರಾಗಿರುವರು. ಆದ್ದ
ರಿಂದ ಬೇರೆ ಎಲ್ಲಾ ಇಸ್ರೇಲರು ತಮ್ಮ ಚೊಚ್ಚಲು ಗಂಡು
ಮಕ್ಕಳನ್ನು ನನಗೆ ಕೊಡಬೇಕಾಗಿಲ್ಲ.

13“ನೀವು ಈಜಿಪ್ಟಿನಲ್ಲಿದ್ದಾಗ ನಾನು ಈಜಿಪ್ಟಿನವರ
ಎಲ್ಲಾ ಚೊಚ್ಚಲು ಮಕ್ಕಳನ್ನು ಕೊಂದೆನು. ಆ ಕಾಲದಲ್ಲಿ
ನಾನು ಇಸ್ರೇಲರ ಎಲ್ಲಾ ಚೊಚ್ಚಲು ಮಕ್ಕಳನ್ನು ನನ್ನವ
ರನ್ನಾಗಿ ತೆಗೆದುಕೊಂಡೆನು. ಎಲ್ಲಾ ಚೊಚ್ಚಲು ಗಂಡು
ಮಕ್ಕಳು ಮತ್ತು ಚೊಚ್ಚಲು ಪಶುಗಳು ನನ್ನದಾಗಿದ್ದವು.
ಆದರೆ ಈಗ ನಿಮ್ಮ ಎಲ್ಲಾ ಚೊಚ್ಚಲು ಗಂಡು ಮಕ್ಕಳನ್ನು
ನಿಮಗೇ ಹಿಂದಕ್ಕೆ ಕೊಡುತ್ತಿದ್ದೇನೆ ಮತ್ತು ಲೇವಿಯರನ್ನು
ನನ್ನವರನ್ನಾಗಿ ಮಾಡುತ್ತಿದ್ದೇನೆ. ನಾನೇ ಯೆಹೋವನು.”

14ಯೆಹೋವನು ತಿರುಗಿ ಸೀನಾಯಿ ಮರುಭೂಮಿ
ಯಲ್ಲಿ ಮೋಶೆಯೊಡನೆ ಮಾತಾಡಿದನು. ಯೆಹೋವನು
ಹೇಳಿದ್ದೇನೆಂದರೆ, 15“ಲೇವಿಯರನ್ನು ಅವರ ಕುಟುಂಬ
ಗಳಿಗನುಗುಣವಾಗಿಯೂ ಕುಲಗಳಿಗನುಸಾರ
ವಾಗಿಯೂ ಲೆಕ್ಕಿಸು. ಪ್ರತಿಯೊಬ್ಬ ಗಂಡಸನ್ನೂ ಒಂದು
ತಿಂಗಳು ಮೇಲ್ಪಟ್ಟ ಪ್ರತಿಯೊಬ್ಬ ಹುಡುಗನನ್ನೂ ಲೆಕ್ಕಿಸು.’
16ಮೋಶೆ ಯೆಹೋವನಿಗೆ ವಿಧೇಯನಾಗಿ ಅವ
ರೆಲ್ಲರನ್ನೂ ಲೆಕ್ಕಿಸಿದನು.

17ಲೇವಿಗೆ ಮೂರು ಗಂಡುಮಕ್ಕಳಿದ್ದರು. ಅವರ
ಹೆಸರುಗಳು: ಗೇರ್ಷೋನ್, ಕೆಹಾತ್ ಮತ್ತು ಮೆರಾರೀ.

18ಪ್ರತಿಯೊಬ್ಬ ಮಗನು ಅನೇಕ ಗೋತ್ರಗಳ ನಾಯಕ
ನಾಗಿದ್ದನು. ಗೇರ್ಷೋನನ ಗೋತ್ರಗಳು: ಲಿಬ್ನೀ ಮತ್ತು
ಶಿಮ್ಮೀ. 19ಕೆಹಾತನ ಗೋತ್ರಗಳು: ಅಮ್ರಾಮ್,
ಇಚ್ಹಾರ್, ಹೆಬ್ರೋನ್ ಮತ್ತು ಉಜ್ಜೀಯೇಲ್.

20ಮೆರಾರೀಯ ಕುಲಗಳು: ಮಹ್ಲೀ ಮತ್ತು ಮೂಷೀ.
ಅವು ಲೇವಿ ಕುಲದ ಗೋತ್ರಗಳಾಗಿವೆ. 21ಲಿಬ್ನೀ ಮತ್ತು
ಶಿಮ್ಮೀಯ ಕುಟುಂಬಗಳು ಗೇರ್ಷೋನನ ಕುಟುಂಬಕ್ಕೆ
ಸೇರಿದವುಗಳಾಗಿದ್ದವು. 22ಈ ಎರಡು ಕುಲಗಳಲ್ಲಿ ಒಂದು
ತಿಂಗಳು ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ 7,500
ಮಂದಿ ಗಂಡಸರು ಮತ್ತು ಹುಡುಗರು ಇದ್ದರು.
23ಗೇರ್ಷೋನನ ಕುಲದವರು ಪಶ್ಚಿಮದಿಕ್ಕಿನಲ್ಲಿ ದೇವ
ದರ್ಶನಗುಡಾರದ ಹಿಂಭಾಗದಲ್ಲಿ ಪಾಳೆಯ ಮಾಡಿ
ಕೊಂಡರು. 24ಗೇರ್ಷೋನನ ಕುಟುಂಬಗಳ ನಾಯಕನು
ಲಾಯೇಲನ ಮಗನಾದ ಎಲ್ಯಾಸಾಫ್. 25ದೇವದರ್ಶನ
ಗುಡಾರದಲ್ಲಿ ಪವಿತ್ರಗುಡಾರವನ್ನು, ಹೊರಡೇರೆಯನ್ನು
ಮತ್ತು ಅದರ ಮೇಲ್ಹೊದಿಕೆಯನ್ನು ನೋಡಿಕೊಳ್ಳುವುದು
ಗೇರ್ಷೋನರ ಕೆಲಸವಾಗಿತ್ತು. ಇದಲ್ಲದೆ ಅವರು ಅಂಗ
ಳದ ಪರದೆಯನ್ನೂ ನೋಡಿಕೊಳ್ಳುತ್ತಿದ್ದರು. 26ಅವರು
ಅಂಗಳದ ಪರದೆಗಳನ್ನೂ ಅಂಗಳದ ಪ್ರವೇಶ ದ್ವಾರದ
ಪರದೆಯನ್ನೂ ನೋಡಿಕೊಳ್ಳಬೇಕು. ಈ ಅಂಗಳವು
ಪವಿತ್ರಗುಡಾರದ ಮತ್ತು ವೇದಿಕೆಯ ಸುತ್ತಲೂ ಇತ್ತು.
ಅವರು ಹಗ್ಗಗಳನ್ನೂ ಪರದೆಗಳೊಂದಿಗೆ ಉಪಯೋ
ಗಿಸುವ ಪ್ರತಿಯೊಂದನ್ನೂ ನೋಡಿಕೊಂಡರು.

27ಅಮ್ರಾಮ್, ಇಚ್ಹಾರ್, ಹೆಬ್ರೋನ್ ಮತ್ತು
ಉಜ್ಜೀಯೇಲ್ ಗೋತ್ರಗಳವರು ಕೆಹಾತನ ಕುಲದವ
ರಾಗಿದ್ದರು. 28ಈ ಕುಲದಲ್ಲಿ ಒಂದು ತಿಂಗಳು ಮೊದಲು
ಗೊಂಡು ಹೆಚ್ಚಾದ ವಯಸ್ಸುಳ್ಳ 8,300* ಗಂಡಸರು
ಮತ್ತು ಹುಡುಗರು ಇದ್ದರು. ಕೆಹಾತ್ಯರಿಗೆ ಪವಿತ್ರಸ್ಥಳದ
ವಸ್ತುಗಳನ್ನು ನೋಡಿಕೊಳ್ಳುವ ಕೆಲಸ ಕೊಡಲ್ಪಟ್ಟಿತು.
29ಕೆಹಾತ್ಯರ ಗೋತ್ರಗಳವರು ಪವಿತ್ರಗುಡಾರದ ದಕ್ಷಿಣ
ದಿಕ್ಕಿನ ಉದ್ದಕ್ಕೂ ಪಾಳೆಯ ಹಾಕಿಕೊಂಡರು.

30ಕೆಹಾತ್ಯರ ನಾಯಕ ಉಜ್ಜೀಯೇಲನ ಮಗನಾದ
ಎಲೀಚಾಫಾನ್. 31ಅವರು ಪವಿತ್ರಪೆಟ್ಟಿಗೆ, ಮೇಜು,
ದೀಪಸ್ತಂಭ, ವೇದಿಕೆಗಳನ್ನು ಮತ್ತು ಪವಿತ್ರಸ್ಥಳದ
ಸಾಮಗ್ರಿಗಳನ್ನು, ಪರದೆಯನ್ನು ಮತ್ತು ಅವುಗಳಿಗೆ
ಸಂಬಂಧಪಟ್ಟ ಎಲ್ಲಾ ಕಷ್ಟಕರವಾದ ಕೆಲಸಗಳನ್ನು ನೋಡಿ
ಕೊಳ್ಳಬೇಕಾಗಿತ್ತು.

32ಆರೋನನ ಮಗನಾದ ಎಲ್ಲಾಜಾರನು ಲೇವಿ
ಯರಿಗೆ ನಾಯಕನಾಗಿದ್ದನು. ಪವಿತ್ರವಸ್ತುಗಳನ್ನು

---

**8,300** ಪುರಾತನ ಗ್ರೀಕ್ ಭಾಷಾಂತರದ ಕೆಲವು ಗ್ರೀಕ್ ಪ್ರತಿಗಳಲ್ಲಿ “8,300” ಎಂದು ಬರೆದಿದೆ. ಆದರೆ ಹೀಬ್ರೂ ಪ್ರತಿಗಳಲ್ಲಿ “8,600” ಎಂದು ಬರೆದಿದೆ. ವಚನ39ರ ಪ್ರಕಾರ ಬೇಕಾದ ಒಟ್ಟು ಸಂಖ್ಯೆ 8,300.

ನೋಡಿಕೊಳ್ಳುವ ಜನರಿಗೆಲ್ಲಾ ಎಲ್ಲಾಜಾರನು
ಮೇಲ್ವಿಚಾರಕನಾಗಿದ್ದನು.
33-34 ಮಹ್ಲೀ ಮತ್ತು ಮೂಷೀಯ ಗೋತ್ರಗಳವರು
ಮೆರಾರೀಯ ಕುಲದವರಾಗಿದ್ದರು. ಮಹ್ಲೀಯ ಕುಲ
ದಲ್ಲಿ ಒಂದು ತಿಂಗಳು ಮೊದಲುಗೊಂಡು ಹೆಚ್ಚಾದ
ವಯಸ್ಸುಳ್ಳ 6,200 ಮಂದಿ ಗಂಡಸರು ಮತ್ತು ಹುಡುಗರು
ಇದ್ದರು. 35 ಮೆರಾರೀ ಕುಲಗಳ ನಾಯಕನು ಅಬೀಹೈಲನ
ಮಗನಾದ ಚೂರೀಯೇಲ್. ಮೆರಾರೀ ಗೋತ್ರಗಳವರು
ಪವಿತ್ರಗುಡಾರದ ಉತ್ತರದಿಕ್ಕಿನಲ್ಲಿ ಪಾಳೆಯ ಮಾಡಿ
ಕೊಂಡರು. 36 ಮೆರಾರೀ ಕುಲದವರಿಗೆ ಪವಿತ್ರಗುಡಾರದ
ಚೌಕಟ್ಟುಗಳನ್ನು ನೋಡಿಕೊಳ್ಳುವ ಕೆಲಸ ಕೊಡಲ್ಪಟ್ಟಿತು.
ಅವರು ಎಲ್ಲಾ ಅಗುಳಿಗಳನ್ನು, ಕಂಬಗಳನ್ನು, ಗದ್ದಿಗೆ
ಕಲ್ಲುಗಳನ್ನು, ಅದರ ಎಲ್ಲ ಉಪಕರಣಗಳನ್ನು ಮತ್ತು
ಅವುಗಳಿಗೆ ಸಂಬಂಧಪಟ್ಟ ಕಷ್ಟಕರವಾದ ಎಲ್ಲಾ ಕೆಲಸ
ವನ್ನು ನೋಡಿಕೊಳ್ಳಬೇಕಾಗಿತ್ತು. 37 ಅವರು ಪವಿತ್ರ
ಗುಡಾರದ ಸುತ್ತಲಿನ ಅಂಗಳದ ಎಲ್ಲಾ ಕಂಬಗಳನ್ನು
ನೋಡಿಕೊಳ್ಳಬೇಕಾಗಿತ್ತು. ಇದರಲ್ಲಿ ಎಲ್ಲಾ ಗದ್ದಿಗೆ
ಕಲ್ಲುಗಳೂ ಗುಡಾರದ ಗೂಟಗಳೂ ಹಗ್ಗಗಳೂ ಸೇರಿವೆ.
38 ಮೋಶೆ, ಆರೋನ ಮತ್ತು ಆರೋನನ ಪುತ್ರರು ದೇವ
ದರ್ಶನಗುಡಾರದ ಮುಂದೆ ಪವಿತ್ರ ಗುಡಾರದ ಪೂರ್ವ
ದಿಕ್ಕಿನಲ್ಲಿ ಪಾಳೆಯಮಾಡಿಕೊಂಡರು. ಪವಿತ್ರಸ್ಥಳವನ್ನು
ನೋಡಿಕೊಳ್ಳುವ ಕೆಲಸ ಅವರಿಗೆ ಕೊಡ ಲ್ಪಟ್ಟಿತು. ಅವರು
ಇಸ್ರೇಲರೆಲ್ಲರಿಗೋಸ್ಕರ ಇದನ್ನು ಮಾಡಿದರು. ಇವರ
ಕರ್ತವ್ಯಗಳನ್ನು ಬೇರೆ ಯಾವನಾದರೂ ಮಾಡಲು
ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡಬೇಕು. 39 ಆ ಲೇವಿ
ಯರಲ್ಲಿದ್ದ ಒಂದು ತಿಂಗಳು ಮೊದಲುಗೊಂಡು ಹೆಚ್ಚು
ವಯಸ್ಸುಳ್ಳ ಎಲ್ಲಾ ಗಂಡಸರನ್ನು ಮತ್ತು ಹುಡುಗರನ್ನು
ಅವರ ಗೋತ್ರಗಳಿಗನುಸಾರವಾಗಿ ಲೆಕ್ಕಿಸಬೇಕೆಂದು
ಯೆಹೋವನು ಮೋಶೆ ಆರೋನರಿಗೆ ಆಜ್ಞಾಪಿಸಿದನು.
ಅವರ ಒಟ್ಟು ಸಂಖ್ಯೆ 22,000.

## ಲೇವಿಯರಿಗೆ ಚೊಚ್ಚಲು ಪುತ್ರರ ಸ್ಥಾನ

40 ಯೆಹೋವನು ಮೋಶೆಗೆ, ‘‘ಇಸ್ರೇಲರ ಒಂದು
ತಿಂಗಳು ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ ಎಲ್ಲಾ
ಚೊಚ್ಚಲು ಗಂಡಸರನ್ನು ಲೆಕ್ಕಿಸು. ಅವರ ಹೆಸರುಗಳ
ಪಟ್ಟಿಮಾಡು. 41 ನಾನು ಈಗ ಇಸ್ರೇಲಿನ ಚೊಚ್ಚಲು
ಗಂಡಸರನ್ನು ತೆಗೆದುಕೊಳ್ಳುವುದಿಲ್ಲ. ಯೆಹೋವನಾದ
ನಾನು ಲೇವಿಯರನ್ನು ತೆಗೆದುಕೊಳ್ಳುವೆನು. ಮಾತ್ರ
ವಲ್ಲದೆ ಇಸ್ರೇಲಿನಲ್ಲಿ ಇತರ ಜನರ ಚೊಚ್ಚಲು ಪ್ರಾಣಿಗಳ
ಬದಲು, ಲೇವಿಯರ ಎಲ್ಲಾ ಚೊಚ್ಚಲು ಪ್ರಾಣಿಗಳನ್ನು
ತೆಗೆದುಕೊಳ್ಳುವೆನು’’ ಎಂದು ಹೇಳಿದನು.

42 ಯೆಹೋವನು ಆಜ್ಞಾಪಿಸಿದಂತೆಯೇ ಮೋಶೆಯು
ಮಾಡಿದನು. ಮೋಶೆಯು ಇಸ್ರೇಲರ ಚೊಚ್ಚಲು ಜನ
ರನ್ನೆಲ್ಲ ಲೆಕ್ಕಿಸಿದನು. 43 ಒಂದು ತಿಂಗಳು ಮತ್ತು ಅದಕ್ಕಿಂತ
ಹೆಚ್ಚು ವಯಸ್ಸಾದ ಎಲ್ಲಾ ಚೊಚ್ಚಲು ಗಂಡಸರ ಹೆಸರು
ಗಳನ್ನು ಮೋಶೆ ಪಟ್ಟಿಮಾಡಿದನು. ಆ ಪಟ್ಟಿಯಲ್ಲಿ 22,273
ಹೆಸರುಗಳಿದ್ದವು.

44 ಯೆಹೋವನು ಮೋಶೆಗೆ ಮತ್ತೆ ಹೇಳಿದ್ದೇನೆಂದರೆ,
45 ‘‘ದೇವರಾದ ನಾನು ಈ ಆಜ್ಞೆಯನ್ನು ಕೊಡುತ್ತೇನೆ:
‘ಇಸ್ರೇಲಿನ ಇತರ ಕುಟುಂಬಗಳಿಂದ ಚೊಚ್ಚಲು ಜನ
ರನ್ನು ತೆಗೆದುಕೊಳ್ಳುವ ಬದಲು ಲೇವಿಯರನ್ನೇ ತೆಗೆದು
ಕೊ. ಇಸ್ರೇಲರ ಚೊಚ್ಚಲು ಪಶುಗಳನ್ನು ತೆಗೆದುಕೊಳ್ಳುವ
ಬದಲು ಲೇವಿಯರ ಪಶುಗಳನ್ನೇ ತೆಗೆದುಕೊ.
ಲೇವಿಯರು ನನ್ನ ಸ್ವತ್ತಾಗಿದ್ದಾರೆ. 46 ಲೇವಿಯರ ಸಂಖ್ಯೆ
22,000. ಆದರೆ ಬೇರೆ ಕುಟುಂಬಗಳ ಚೊಚ್ಚಲು ಪುತ್ರರ
ಸಂಖ್ಯೆ 22,273. ಹೀಗೆ ಲೇವಿಯರಿಗಿಂತ ಇನ್ನೂ
ರೆಪ್ಪತ್ತೂರು ಮಂದಿ ಹೆಚ್ಚು ಚೊಚ್ಚಲು ಪುತ್ರರಿರುತ್ತಾರೆ.
47 ಅಧಿಕೃತ ಅಳತೆಯನ್ನು ಉಪಯೋಗಿಸಿ ಪ್ರತಿಯೊಬ್ಬನಿಗೆ
ಅಂದರೆ ಇನ್ನೂರೆಪ್ಪತ್ತೂರು ಮಂದಿಗೆ ಐದೈದು ಶೆಕೆಲ್
ಬೆಳ್ಳಿಯನ್ನು ಸಂಗ್ರಹಿಸು. (ಅಧಿಕೃತ ಅಳತೆಯಲ್ಲಿ ಒಂದು
ಶೆಕೆಲ್ ಅಂದರೆ ಇಪ್ಪತ್ತು ಗೆರಾ.) ಇಸ್ರೇಲರಿಂದ ಈ
ಬೆಳ್ಳಿಯನ್ನು ಸಂಗ್ರಹಿಸು. 48 ಆ ಬೆಳ್ಳಿಯನ್ನು ಆರೋನ
ನಿಗೂ ಅವನ ಪುತ್ರರಿಗೂ ಕೊಡು. ಈ ಹಣವು ಇಸ್ರೇಲರ
ಇನ್ನೂರೆಪ್ಪತ್ತೂರು ಮಂದಿಗೆ ಈಡಾಗಿದೆ.’’

49 ಲೇವಿಯರಿಗಿಂತ ಇಸ್ರೇಲರಲ್ಲಿ ಇನ್ನೂರೆಪ್ಪತ್ತೂರು
ಮಂದಿ ಚೊಚ್ಚಲು ಗಂಡಸರು ಹೆಚ್ಚಾಗಿದ್ದುದರಿಂದ
ಮೋಶೆಯು ಆ ಇನ್ನೂರೆಪ್ಪತ್ತೂರು ಮಂದಿಗೆ ಈಡು
ಕೊಡುವುದಕ್ಕಾಗಿ ಹಣವನ್ನು ಸಂಗ್ರಹಿಸಿದನು.
50 ಮೋಶೆಯು ಇಸ್ರೇಲರಲ್ಲಿ ಚೊಚ್ಚಲಾದ ಗಂಡಸರಿಂದ
ಬೆಳ್ಳಿಯನ್ನು ಸಂಗ್ರಹಿಸಿದನು. (ಅವನು ಅಧಿಕೃತ ಅಳತೆ
ಯನ್ನು ಉಪಯೋಗಿಸಿ ಒಂದು ಸಾವಿರದ ಮುನ್ನೂ
ರೈವತ್ತೈದು ಶೆಕಲ್ ಬೆಳ್ಳಿಯನ್ನು ಸಂಗ್ರಹಿಸಿದನು.)
51 ಮೋಶೆಯು ಯೆಹೋವನಿಗೆ ವಿಧೇಯನಾಗಿ ಆತನ
ಆಜ್ಞೆಯಂತೆ ಬೆಳ್ಳಿಯನ್ನು ಆರೋನನಿಗೂ ಅವನ
ಪುತ್ರರಿಗೂ ಕೊಟ್ಟನು.

## ಕೆಹಾತ್ ಗೋತ್ರದವರ ಕೆಲಸಗಳು

4 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇ
ನೆಂದರೆ, 2 ‘‘ಕೆಹಾತ್ ಗೋತ್ರದ ಪುರುಷರನ್ನು
ಲೆಕ್ಕಿಸು. (ಕೆಹಾತ್ಯರು ಲೇವಿ ವಂಶದವರಾಗಿದ್ದಾರೆ.)
3 ದೇವದರ್ಶನಗುಡಾರಕ್ಕೆ ಸಂಬಂಧಿಸಿದ ಕೆಲಸವನ್ನು
ಮಾಡಲು ಯೋಗ್ಯರಾದ ಮೂವತ್ತರಿಂದ ಐವತ್ತರೊಳ
ಗಿನ ಎಲ್ಲಾ ಪುರುಷರನ್ನು ಲೆಕ್ಕಿಸು. 4 ಅವರು ದೇವದರ್ಶನ

ಗುಡಾರದಲ್ಲಿರುವ ಮಹಾಪರಿಶುದ್ಧ ವಸ್ತುಗಳನ್ನು
ನೋಡಿಕೊಳ್ಳಬೇಕು.
5“ಇಸ್ರೇಲರು ಹೊಸ ಸ್ಥಳಕ್ಕೆ ಪ್ರಯಾಣ ಮಾಡುವಾಗ
ಆರೋನನೂ ಅವನ ಪುತ್ರರೂ ದೇವದರ್ಶನಗುಡಾರ
ದೊಳಕ್ಕೆ ಹೋಗಿ, ಮಹಾಪವಿತ್ರಸ್ಥಳವನ್ನು ಮರೆಮಾಡುವ
ತೆರೆಯನ್ನು ಇಳಿಸಿ, ಅದನ್ನು ಒಡಂಬಡಿಕೆಯ ಪವಿತ್ರ
ಪೆಟ್ಟಿಗೆಗೆ ಹೊದಿಸಬೇಕು. 6ಬಳಿಕ ಅವರು ಇವುಗಳಿಗೆಲ್ಲ
ಶ್ರೇಷ್ಠವಾದ ತೊಗಲಿನಿಂದ ಮಾಡಿದ ಹೊದಿಕೆಯನ್ನು
ಹೊದಿಸಬೇಕು. ಆಮೇಲೆ ಅವರು ನೀಲಿಬಟ್ಟೆಯನ್ನು
ತೊಗಲಿನ ಮೇಲೆ ಹಾಸಿ ಪವಿತ್ರಪೆಟ್ಟಿಗೆಯ ಬಳಿಗಳಲ್ಲಿ
ಹೊರುವ ಕಂಬಗಳನ್ನು ಸೇರಿಸಬೇಕು.”
7“ಬಳಿಕ ಅವರು ಪವಿತ್ರ ಮೇಜಿನ ಮೇಲೆ ನೀಲಿ
ಬಟ್ಟೆಯನ್ನು ಹಾಸಬೇಕು. ಪಾನದ್ರವ್ಯಾರ್ಪಣೆಗಳಿಗಾಗಿ
ತಟ್ಟೆಗಳನ್ನೂ ಸೌಟುಗಳನ್ನೂ ಬಟ್ಟಲುಗಳನ್ನೂ ಹೂಜಿ
ಗಳನ್ನೂ ವಿಶೇಷ ರೊಟ್ಟಿಯನ್ನೂ ಮೇಜಿನ ಮೇಲೆ
ಇಡಬೇಕು. 8ಬಳಿಕ ಅವುಗಳ ಮೇಲೆ ಕೆಂಪುಬಟ್ಟೆಯನ್ನು
ಹಾಸಿ, ಶ್ರೇಷ್ಠವಾದ ತೊಗಲಿನಿಂದ ಮಾಡಿದ ಹೊದಿಕೆ
ಯನ್ನು ಅದಕ್ಕೆ ಹೊದಿಸಬೇಕು. ಬಳಿಕ ಹೊರುವ ಕಂಬ
ಗಳನ್ನು ಮೇಜಿನ ಬಳಿಗಳಲ್ಲಿ ಸೇರಿಸಬೇಕು.
9“ಆಮೇಲೆ ದೀಪಸ್ತಂಭಕ್ಕೂ ಅದರ ದೀಪಗಳಿಗೂ
ದೀಪಗಳ ಉಪಕರಣಗಳಿಗೂ (ಬೂದಿ ತೆಗೆಯುವ)
ಅಗ್ಗಿಷ್ಟಿಕೆಗೂ ಮತ್ತು ಅದಕ್ಕಾಗಿ ಉಪಯೋಗಿಸುವ ಎಲ್ಲಾ
ಎಣ್ಣೆಯ ಪಾತ್ರೆಗಳಿಗೂ ನೀಲಿಬಟ್ಟೆಯನ್ನು ಹೊದಿಸ
ಬೇಕು. 10ಬಳಿಕ ದೀಪಸ್ತಂಭಕ್ಕೂ ಅದರ ಎಲ್ಲಾ ಉಪ
ಕರಣಗಳಿಗೂ ಶ್ರೇಷ್ಠವಾದ ತೊಗಲಿನಿಂದ ಮಾಡಿದ
ಹೊದಿಕೆಯನ್ನು ಹೊದಿಸಬೇಕು. ಆಮೇಲೆ ಅವರು ಈ
ಎಲ್ಲಾ ವಸ್ತುಗಳನ್ನು ಹೊರುವ ಕಂಬಗಳಿಗೆ ಕಟ್ಟಬೇಕು.
11“ಅವರು ಚಿನ್ನದ ವೇದಿಕೆಯ ಮೇಲೆ ನೀಲಿಬಟ್ಟೆ
ಯನ್ನು ಹಾಸಿ, ಶ್ರೇಷ್ಠ ತೊಗಲಿನಿಂದ ಅದನ್ನು ಮುಚ್ಚ
ಬೇಕು. ಬಳಿಕ ಅವರು ಹೊರುವ ಕೋಲುಗಳನ್ನು
ವೇದಿಕೆಯ ಬಳಿಗಳಿಗೆ ಸೇರಿಸಬೇಕು.
12“ಬಳಿಕ ಆರಾಧನೆಗಾಗಿ ಪವಿತ್ರಸ್ಥಳದಲ್ಲಿ ಉಪ
ಯೋಗಿಸಲ್ಪಡುವ ಎಲ್ಲಾ ವಿಶೇಷ ವಸ್ತುಗಳನ್ನು ಒಟ್ಟಾಗಿ
ಸೇರಿಸಬೇಕು. ಅವುಗಳನ್ನು ನೀಲಿಬಟ್ಟೆಯಿಂದ ಮುಚ್ಚ
ಬೇಕು. ಬಳಿಕ ಅವುಗಳಿಗೆ ಶ್ರೇಷ್ಠವಾದ ತೊಗಲನ್ನು
ಹೊದಿಸಬೇಕು. ಅವರು ಈ ವಸ್ತುಗಳನ್ನು ಹೊರು
ವುದಕ್ಕಾಗಿ ಚೌಕಟ್ಟಿಗೆ ಕಟ್ಟಬೇಕು.
13“ಅವರು ತಾಮ್ರದ ವೇದಿಕೆಯಿಂದ ಬೂದಿಯನ್ನು
ತೆಗೆದು, ನೇರಳೆಬಟ್ಟೆಯನ್ನು ಅದರ ಮೇಲೆ ಹಾಸಬೇಕು.
14ಬಳಿಕ ಅವರು ವೇದಿಕೆಯಲ್ಲಿ ಆರಾಧನೆಗಾಗಿ ಉಪ
ಯೋಗಿಸಲ್ಪಡುವ ಎಲ್ಲ ವಸ್ತುಗಳನ್ನು ಒಟ್ಟಾಗಿ ಸೇರಿಸ
ಬೇಕು. ಅವುಗಳು ಯಾವುವೆಂದರೆ, ಅಗ್ಗಿಷ್ಟಿಕೆಗಳು,
ಕವಲುಸೌಟುಗಳು, ಸಲಿಕೆಗಳು ಮತ್ತು ಬೋಗುಣಿಗಳು.
ಅವರು ಇವುಗಳನ್ನು ತಾಮ್ರದ ವೇದಿಕೆಯ ಮೇಲೆ
ಇಡಬೇಕು. ಬಳಿಕ ಅವರು ಶ್ರೇಷ್ಠವಾದ ಒಂದು ತೊಗ
ಲಿನ ಹೊದಿಕೆಯನ್ನು ಇವುಗಳಿಗೆಲ್ಲ ಹೊದಿಸಿ, ಹೊರುವ
ಕಂಬಗಳನ್ನು ವೇದಿಕೆಯ ಬಳಿಗಳಲ್ಲಿ ಸೇರಿಸಬೇಕು.
15“ಇಸ್ರೇಲರು ಪ್ರಯಾಣಮಾಡುವ ಸಮಯದಲ್ಲಿ
ಆರೋನನು ಮತ್ತು ಅವನ ಪುತ್ರರು ಪವಿತ್ರವಸ್ತುಗಳಿಗೂ
ಪವಿತ್ರ ಉಪಕರಣಗಳಿಗೂ ಹೊದಿಸಿದ ನಂತರ,
ಕೆಹಾತ್ಯರು ಅವುಗಳನ್ನು ಹೊರುವುದಕ್ಕೆ ಹೋಗ
ಬಹುದು. ಈ ರೀತಿ ಅವರು ಪವಿತ್ರ ವಸ್ತುಗಳನ್ನು ಮುಟ್ಟ
ಬಾರದು; ಅವರು ಮುಟ್ಟಿದರೆ ಸಾಯುತ್ತಾರೆ.
16“ಯಾಜಕನಾದ ಆರೋನನ ಮಗನಾದ
ಎಲ್ಲಾಜಾರನು ಇಡೀ ಪವಿತ್ರಗುಡಾರವನ್ನು ಮತ್ತು ಎಲ್ಲಾ
ಪವಿತ್ರಸ್ಥಳವನ್ನು ಮತ್ತು ಅದರೊಳಗಿರುವ ಎಲ್ಲಾ
ಪಾತ್ರೆಗಳನ್ನು ನೋಡಿಕೊಳ್ಳುವ ಜವಾಬ್ದಾರಿ ಹೊಂದಿ
ದ್ದಾನೆ. ದೀಪದ ಎಣ್ಣೆಗೂ ಪರಿಮಳಧೂಪಕ್ಕೂ ದೈನಂದಿನ
ಧಾನ್ಯಸಮರ್ಪಣೆಗೂ ಅಭಿಷೇಕತೈಲಕ್ಕೂ ಅವನು
ಜವಾಬ್ದಾರನಾಗಿದ್ದಾನೆ.”
17ಯೆಹೋವನು ಮೋಶೆ ಆರೋನರಿಗೆ,
18“ಕೆಹಾತ್ಯರು ಲೇವಿಯರ ಮಧ್ಯದಿಂದ ಇಲ್ಲವಾಗದಂತೆ
ಎಚ್ಚರಿಕೆಯಾಗಿರಿ. 19ಅವರು ಮಹಾಪರಿಶುದ್ಧ ವಸ್ತುಗಳ
ಹತ್ತಿರ ಬಂದಾಗ ಸಾಯದಂತೆ ನೀವು ಅವರ ವಿಷಯದಲ್ಲಿ
ಮಾಡಬೇಕಾದದ್ದೇನೆಂದರೆ, ಆರೋನನೂ ಅವನ
ಪುತ್ರರೂ ಒಳಗೆ ಬಂದು, ಪ್ರತಿಯೊಬ್ಬ ಕೆಹಾತ್ಯನು ಮಾಡ
ಬೇಕಾದ ಕೆಲಸವನ್ನು ಮತ್ತು ಹೊತ್ತುಕೊಂಡು ಹೋಗ
ಬೇಕಾದದ್ದನ್ನು ತೋರಿಸಲಿ. 20ಇಲ್ಲವಾದರೆ, ಕೆಹಾತ್ಯರು
ಒಳಗೆ ಬಂದು ಪವಿತ್ರವಸ್ತುಗಳನ್ನು ಮುಟ್ಟುವರು. ಆ
ಮಹಾಪರಿಶುದ್ಧ ವಸ್ತುಗಳನ್ನು ಅವರು ಒಂದು ಕ್ಷಣ
ಮುಟ್ಟಿದರೂ ಸಾಯುತ್ತಾರೆ” ಎಂದು ಹೇಳಿದನು.

### ಗೇರ್ಷೋನ್ ಕುಟುಂಬದವರ ಕೆಲಸಗಳು

21ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, 22-
23“ನೀನು ಗೇರ್ಷೋನ್ಯರನ್ನು ಕುಟುಂಬಗಳಿಗನು
ಸಾರವಾಗಿ ಮತ್ತು ಕುಲಗಳಿಗನುಸಾರವಾಗಿ ಲೆಕ್ಕಿಸು.
ಅಲ್ಲದೆ ದೇವದರ್ಶನಗುಡಾರದ ಸೇವೆಯನ್ನು ಮಾಡಲು
ಯೋಗ್ಯರಾದ ಗಂಡಸರನ್ನು ಪಟ್ಟಿಮಾಡು. ಅವರ
ವಯಸ್ಸು ಮೂವತ್ತರಿಂದ ಐವತ್ತು ವರ್ಷದೊಳಗಿರ
ಬೇಕು.
24“ವರ್ಗಾವಣೆಗಾಗಿ ಸಾಮಾನುಗಳನ್ನು ಕಟ್ಟುವು
ದರಲ್ಲಿಯೂ ವರ್ಗಾವಣೆಯಲ್ಲಿಯೂ ಗೇರ್ಷೋನ್ಯರು
ಮಾಡತಕ್ಕ ಕೆಲಸ ಯಾವುದೆಂದರೆ, 25ಅವರು ಪವಿತ್ರ
ಗುಡಾರದ ಬಟ್ಟೆಗಳನ್ನು, ದೇವದರ್ಶನಗುಡಾರ ಮತ್ತು

ಅದರ ಹೊದಿಕೆ, ಅದರ ಮೇಲಿರುವ ಶ್ರೇಷ್ಠವಾದ
ತೊಗಲಿನ ಹೊದಿಕೆ ಮತ್ತು ದೇವದರ್ಶನಗುಡಾರ
ದಲ್ಲಿರುವ ಪ್ರವೇಶದ್ವಾರದ ಪರದೆಯನ್ನು ವರ್ಗಾಯಿಸ
ಬೇಕು. 26ಅಂಗಳದ ಪರದೆಗಳನ್ನು, ಪವಿತ್ರಗುಡಾರವನ್ನು
ಮತ್ತು ವೇದಿಕೆಯ ಸುತ್ತಲೂ ಇರುವ ಅಂಗಳ ಪ್ರವೇಶ
ದ್ವಾರದ ಪರದೆಯನ್ನು, ಅವುಗಳ ಹಗ್ಗಗಳನ್ನು, ಮತ್ತು
ಇವುಗಳ ಎಲ್ಲಾ ಉಪಕರಣಗಳನ್ನು ವರ್ಗಾಯಿಸಬೇಕು.
27ಗೇರ್ಷೋನ್ಯರು ಮಾಡುವ ಎಲ್ಲಾ ಕೆಲಸಗಳನ್ನು
ಅಂದರೆ ವರ್ಗಾವಣೆಗಾಗಿ ಸಾಮಾನುಗಳನ್ನು ಕಟ್ಟು
ವುದರಲ್ಲಿಯೂ ವರ್ಗಾವಣೆ ಮಾಡುವುದರಲ್ಲಿಯೂ
ಆರೋನ ಮತ್ತು ಅವನ ಪುತ್ರರು ಮಾರ್ಗದರ್ಶನ ನೀಡು
ವರು. ಗೇರ್ಷೋನ್ಯರು ವರ್ಗಾಯಿಸುವ ಎಲ್ಲವನ್ನು
ಅವರೇ ಕಾಯಬೇಕೆಂಬ ಜವಾಬ್ದಾರಿಕೆಯನ್ನು ನೀನು
ಅವರಿಗೆ ಕೊಡು.

28ದೇವದರ್ಶನ ಗುಡಾರಕ್ಕೋಸ್ಕರ ಮತ್ತು ತಮ್ಮ
ಕಾವಲಿನ ಕರ್ತವ್ಯದಲ್ಲಿ ಗೇರ್ಷೋನ್ಯರು ಮಾಡಬೇಕಾದ
ಕೆಲಸ ಇದೇ. ಆರೋನನ ಮಗನಾದ ಈತಾಮಾರನು
ಅವರ ಮೇಲ್ವಿಚಾರಕನಾಗಿರಬೇಕು.''

### ಮೆರಾರೀ ಕುಟುಂಬದವರ ಕೆಲಸಗಳು

29''ನೀನು ಮೆರಾರೀಯರನ್ನೂ ಅವರ ಕುಲಗಳಿಗನು
ಗುಣವಾಗಿ ಮತ್ತು ಕುಟುಂಬಗಳಿಗನುಗುಣವಾಗಿ
ಲೆಕ್ಕಿಸು. 30ದೇವದರ್ಶನಗುಡಾರದ ಸೇವೆಯ ದಳದಲ್ಲಿ
ಕೆಲಸಮಾಡಲು ಯೋಗ್ಯರಾದ ಗಂಡಸರನ್ನು ಲೆಕ್ಕಿಸು.
ಅವರ ವಯಸ್ಸು ಮೂವತ್ತರಿಂದ ಮೊದಲುಗೊಂಡು
ಐವತ್ತರೊಳಗಿರಬೇಕು. 31ಈ ಕೆಳಕಂಡ ವಸ್ತುಗಳನ್ನು
ಮೆರಾರೀಯರು ವರ್ಗಾವಣೆಗಾಗಿ ಕಟ್ಟುವರು,
ವರ್ಗಾಯಿಸುವರು ಮತ್ತು ಕಾವಲುಕಾಯುವರು; ಪವಿತ್ರ
ಡೇರೆಯ ಚೌಕಟ್ಟುಗಳು, ಅದರ ಅಡ್ಡಪಟ್ಟಿಗಳು, ಅದರ
ಸ್ತಂಬಗಳು, ಅದರ ಗದ್ದಿಗೆಕಲ್ಲುಗಳು, 32ಅಂಗಳದ
ಸ್ತಂಬಗಳು ಮತ್ತು ಅವುಗಳ ಗದ್ದಿಗೆಕಲ್ಲುಗಳು, ಅಗುಳಿ
ಗಳು, ಹಗ್ಗಗಳು ಮತ್ತು ಅವರ ಕೆಲಸಕ್ಕೆ ಬೇಕಾದ ಎಲ್ಲಾ
ಉಪಕರಣಗಳು. ಅವರು ವರ್ಗಾಯಿಸಬೇಕಾದ ಮತ್ತು
ಕಾವಲುಕಾಯಬೇಕಾದ ವಸ್ತುಗಳನ್ನು ನೀನು ಹೆಸರೆಸ
ರಾಗಿ ಅವರಿಗೆ ವಹಿಸಿಕೊಡಬೇಕು. 33ದೇವದರ್ಶನ
ಗುಡಾರಕ್ಕೋಸ್ಕರ ಮೆರಾರೀಯರು ಮಾಡತಕ್ಕ ಕೆಲಸ
ಇದೇ. ಅವರ ಕೆಲಸವನ್ನು ಮೇಲ್ವಿಚಾರಣೆ ಮಾಡುವುದು
ಯಾಜಕನಾದ ಆರೋನನ ಮಗನಾದ ಈತಾಮಾರನ
ಜವಾಬ್ದಾರಿಯಾಗಿದೆ.''

### ಲೇವಿ ಕುಟುಂಬಗಳು

34-35ಮೋಶೆ ಆರೋನರೂ, ಸಮುದಾಯದ
ಪ್ರಧಾನರೂ ಕುಲ ಮತ್ತು ಕುಟುಂಬಗಳಿಗನುಗುಣವಾಗಿ
ಕೆಹಾತ್ಯರಲ್ಲಿ ಮೂವತ್ತು ವರ್ಷದಿಂದ ಮೊದಲುಗೊಂಡು
ಐವತ್ತು ವರ್ಷದೊಳಗಿರುವ ಗಂಡಸರನ್ನು ಲೆಕ್ಕಿಸಿದರು.
ದೇವದರ್ಶನಗುಡಾರಕ್ಕೋಸ್ಕರ ಸೇವೆಯ ದಳದಲ್ಲಿ
ಕೆಲಸ ಮಾಡಲು ಯೋಗ್ಯರಾದ ಗಂಡಸರನ್ನೇ ಅವರು
ಲೆಕ್ಕಿಸಿದರು.

36ಅವರಲ್ಲಿ ಈ ಕೆಲಸವನ್ನು ಮಾಡಲು ಅರ್ಹರಾಗಿ
ಗೋತ್ರ ಕುಟುಂಬಗಳ ಪ್ರಕಾರ ಲೆಕ್ಕಿಸಲ್ಪಟ್ಟವರು 2,750
ಮಂದಿ. 37ಯೆಹೋವನು ಮೋಶೆಗೆ ಆಜ್ಞಾಪಿಸಿದ ಪ್ರಕಾರ
ಮೋಶೆ ಆರೋನರು ಕೆಹಾತ್ಯರನ್ನು ಲೆಕ್ಕಿಸಲಾಗಿ ಅವರಲ್ಲಿ
ದೇವದರ್ಶನಗುಡಾರಕ್ಕೆ ಸಂಬಂಧಪಟ್ಟ ಕೆಲಸವನ್ನು
ಮಾಡತಕ್ಕವರು ಇವರೇ. 38-39ಗೇರ್ಷೋನ್ಯರಲ್ಲಿಯೂ
ಮೂವತ್ತು ವರ್ಷ ಮೊದಲುಗೊಂಡು ಐವತ್ತು ವರ್ಷ
ದೊಳಗಿರುವ ಮತ್ತು ದೇವದರ್ಶನಗುಡಾರಕ್ಕೋಸ್ಕರ
ಸೇವೆಯ ದಳದಲ್ಲಿ ಕೆಲಸ ಮಾಡಲು ಯೋಗ್ಯರಾದ
ಗಂಡಸರನ್ನು ಕುಲ ಮತ್ತು ಕುಟುಂಬಗಳಿಗನುಗುಣವಾಗಿ
ಲೆಕ್ಕಿಸಲಾಯಿತು. 40ಅವರ ಸಂಖ್ಯೆ 2,630.
41ಯೆಹೋವನ ಅಪ್ಪಣೆಯ ಮೇರೆಗೆ ಮೋಶೆ
ಆರೋನರು ಗೇರ್ಷೋನ್ಯರನ್ನು ಲೆಕ್ಕಿಸಿದರು. ಅವರಲ್ಲಿ
ದೇವದರ್ಶನಗುಡಾರದ ವಿಶೇಷ ಕೆಲಸವನ್ನು ಮಾಡತಕ್ಕ
ವರು ಇವರೇ. 42-43ಮೆರಾರೀಯರಲ್ಲಿಯೂ ಮೂವತ್ತ
ರಿಂದ ಐವತ್ತು ವರುಷದ ಒಳಗಿರುವ ಮತ್ತು ದೇವದರ್ಶನ
ಗುಡಾರಕ್ಕೋಸ್ಕರ ಸೇವೆಯ ದಳದಲ್ಲಿ ಕೆಲಸಮಾಡಲು
ಯೋಗ್ಯರಾದ ಗಂಡಸರನ್ನು ಕುಲ ಮತ್ತು ಕುಟುಂಬ
ಗಳಿಗೆ ಅನುಗುಣವಾಗಿ ಲೆಕ್ಕಿಸಲಾಯಿತು. 44ಅವರ ಒಟ್ಟು
ಸಂಖ್ಯೆ 3,200.

45ಯೆಹೋವನ ಅಪ್ಪಣೆಯ ಮೇರೆಗೆ ಮೋಶೆ
ಆರೋನರು ಅವರನ್ನು ಲೆಕ್ಕಿಸಿದರು. ಮೆರಾರೀಯರ
ಕುಲಗಳಿಂದ ಈ ಗಂಡಸರನ್ನು ದಾಖಲಾತಿ ಮಾಡಿಕೊಳ್ಳ
ಲಾಯಿತು. 46ಹೀಗೆ ಮೋಶೆ ಆರೋನರು ಇಸ್ರೇಲರ
ಪ್ರಧಾನರನ್ನೂ ಎಲ್ಲಾ ಲೇವಿಯರನ್ನೂ ಕುಲ ಮತ್ತು
ಕುಟುಂಬಗಳಿಗೆ ಅನುಗುಣವಾಗಿ ಲೆಕ್ಕಿಸಿದರು.
47ಮೂವತ್ತರಿಂದ ಐವತ್ತು ವರ್ಷದೊಳಗಿರುವ ಮತ್ತು
ದೇವದರ್ಶನಗುಡಾರಕ್ಕೆ ಸಂಬಂಧಿಸಿದ ವಸ್ತುಗಳನ್ನು
ವರ್ಗಾವಣೆಗಾಗಿ ಕಟ್ಟುವುದಕ್ಕೂ ವರ್ಗಾವಣೆಯ ಕೆಲ
ಸಕ್ಕೂ ಯೋಗ್ಯರಾದ ಎಲ್ಲಾ ಗಂಡಸರನ್ನು ಲೆಕ್ಕಿಸಿದರು.
48ಅವರ ಒಟ್ಟು ಸಂಖ್ಯೆ 8,580.

49ಹೀಗೆ ಯೆಹೋವನು ಮೋಶೆಗೆ ಆಜ್ಞಾಪಿಸಿದ
ಮೇರೆಗೆ ಪ್ರತಿಯೊಬ್ಬನೂ ಲೆಕ್ಕಿಸಲ್ಪಟ್ಟನು. ಪ್ರತಿಯೊಬ್ಬ
ನಿಗೂ ವರ್ಗಾವಣೆಗಾಗಿ ವಸ್ತುಗಳನ್ನು ಕಟ್ಟುವ ಮತ್ತು
ವರ್ಗಾವಣೆ ಕೆಲಸದ ಕರ್ತವ್ಯಗಳನ್ನು ಗೊತ್ತುಪಡಿಸ
ಲಾಯಿತು. ಯೆಹೋವನು ಆಜ್ಞಾಪಿಸಿದ ಮೇರೆಗೆ ಇದು
ಮಾಡಲ್ಪಟ್ಟಿತು.

## ಶುದ್ಧಾಚಾರದ ಕುರಿತು ನಿಯಮಗಳು

5 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
2‘‘ಭಯಂಕರವಾದ ಚರ್ಮರೋಗವುಳ್ಳವರನ್ನೂ
ಮೇಹಸ್ರಾವವುಳ್ಳವರನ್ನೂ ಹೆಣದ ಸೋಂಕಿನಿಂದ ಅಶು
ದ್ಧರಾದವರನ್ನೂ ಪಾಳೆಯದಿಂದ ಹೊರಗೆಡಬೇಕೆಂದು
ಇಸ್ರೇಲರಿಗೆ ಆಜ್ಞಾಪಿಸು. 3ಅಂಥವರು ಗಂಡಸರೇ ಆಗಲಿ
ಹೆಂಗಸರೇ ಆಗಲಿ ಅವರೆಲ್ಲರನ್ನೂ ಪಾಳೆಯದಿಂದ ಹೊರ
ಡಿಸಬೇಕು. ನಾನೇ ಅವರ ಪಾಳೆಯದಲ್ಲಿ ವಾಸಮಾಡು
ವುದರಿಂದ ಅವರು ಅದನ್ನು ಅಶುದ್ಧ ಮಾಡಬಾರದು.’’
4ಯೆಹೋವನು ಮೇರೆಗೆ ವಿಧಿಸಿದಂತೆಯೆ ಇಸ್ರೇಲರು
ತಮ್ಮಲ್ಲಿರುವ ಅಂಥವರೆಲ್ಲರನ್ನೂ ಪಾಳೆಯದ ಹೊರಗಿರಿ
ಸಿದರು. ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆಯೇ
ಅವರು ಮಾಡಿದರು.

## ತಪ್ಪುಕಾರ್ಯಗಳಿಗೆ ಪ್ರಾಯಶ್ಚಿತ್ತ ವಿಧಿ

5ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
6‘‘ಇದನ್ನು ಇಸ್ರೇಲರಿಗೆ ತಿಳಿಸು: ಯಾವ ಪುರುಷನಾಗಲೀ
ಸ್ತ್ರೀಯಾಗಲೀ ಮತ್ತೊಬ್ಬನನ್ನು ಆಸ್ತಿಯ ವಿಷಯದಲ್ಲಿ
ಮೋಸಗೊಳಿಸಿದರೆ ಅವನು ಸುಳ್ಳು ಪ್ರಮಾಣ ಮಾಡು
ವುದರ ಮೂಲಕ ಯೆಹೋವನಿಗೆ ವಿರೋಧವಾಗಿ ಹೊಲ
ಸಾದ ಕಾರ್ಯವನ್ನು ಮಾಡಿದಂತಾಯಿತು. ಆದ್ದರಿಂದ
ಅವನು ದೋಷಿಯಾಗಿದ್ದಾನೆ. 7ಆದ್ದರಿಂದ ಅಂಥವನು
ತನ್ನ ಪಾಪವನ್ನು ಅರಿಕೆಮಾಡಬೇಕು. ಅದಲ್ಲದೆ, ಅಪ
ರಾಧ ಮಾಡಿದವನು ನಷ್ಟಪಟ್ಟವನಿಗೆ ಮೂಲದ್ರವ್ಯದ
ಬೆಲೆಯೊಡನೆ ಐದನೆಯ ಭಾಗವನ್ನು ಹೆಚ್ಚಾಗಿ ಕೊಡ
ಬೇಕು. 8ದಂಡವನ್ನು ತೆಗೆದುಕೊಳ್ಳ ತಕ್ಕವನು ತೀರಿ
ಹೋಗಿ, ಹತ್ತಿರ ಸಂಬಂಧಿಯೂ ಇಲ್ಲದ ಪಕ್ಷಕ್ಕೆ, ಆ ದ್ರವ್ಯ
ವನ್ನು ಯೆಹೋವನಿಗೆ ಕೊಡಬೇಕು. ಅವನು ಯಾಜಕ
ನಿಗೆ ಪೂರ್ಣ ಬೆಲೆಯನ್ನು ಕೊಡಬೇಕು. ತಪ್ಪು ಮಾಡಿದ
ವನು ಯಾಜಕನಿಗೆ ಒಂದು ಟಗರನ್ನೂ ತಂದುಕೊಡ
ಬೇಕು. ಈ ಟಗರನ್ನು ತಪ್ಪುಮಾಡಿದವನ ಪ್ರಾಯಶ್ಚಿತ್ತ
ಕ್ಕಾಗಿ ಯಜ್ಞಮಾಡಬೇಕು. ಆದರೆ ಉಳಿದದ್ದನ್ನು
ಯಾಜಕನು ಇಟ್ಟುಕೊಳ್ಳಬಹುದು.
9-10‘‘ಒಬ್ಬನು ದೇವರಿಗೆ ವಿಶೇಷ ಕಾಣಿಕೆಯನ್ನು
ಅರ್ಪಿಸಿದರೆ, ಅದನ್ನು ಸ್ವೀಕರಿಸುವ ಯಾಜಕನು ತನಗಾಗಿ
ಅದನ್ನು ಇಟ್ಟುಕೊಳ್ಳಬಹುದು. ಅದು ಅವನದಾಗಿರು
ತ್ತದೆ, ಒಬ್ಬನು ಈ ವಿಶೇಷ ಕಾಣಿಕೆಗಳನ್ನು ಕೊಡ
ಬೇಕಾಗಿಲ್ಲ. ಆದರೆ ಅವನು ಅವುಗಳನ್ನು ಕೊಟ್ಟರೆ ಅವು
ಯಾಜಕನಿಗೆ ಸೇರುತ್ತವೆ.’’

## ಸಂಶಯ ಪಡುವ ಗಂಡಂದಿರು

11ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
12‘‘ಈ ವಿಷಯಗಳನ್ನು ಇಸ್ರೇಲರಿಗೆ ಹೇಳು: ಒಬ್ಬನ
ಹೆಂಡತಿ ಸನ್ಮಾರ್ಗವನ್ನು ಬಿಟ್ಟು ತನ್ನ ಗಂಡನಿಗೆ ಅಪನಂಬಿ
ಗಸ್ತಳಾಗಿದ್ದು, 13ಇನ್ನೊಬ್ಬನೊಡನೆ ಲೈಂಗಿಕ ಸಂಬಂಧ
ಮಾಡಿರಬಹುದು. ಅವಳ ಈ ಕಾರ್ಯವು ಗಂಡನಿಗೆ
ಗೊತ್ತಿಲ್ಲದಿರಬಹುದು; ಯಾವ ಸಾಕ್ಷಿಯೂ ಇಲ್ಲದಿರು
ವುದರಿಂದ ಮತ್ತು ಅವಳು ಈ ಕಾರ್ಯ ಮಾಡು
ತ್ತಿರುವಾಗಲೇ ಸಿಕ್ಕಿಕೊಂಡಿಲ್ಲದಿರುವುದರಿಂದ ತಾನು
ತನ್ನನ್ನು ಅಶುದ್ಧಳನ್ನಾಗಿ ಮಾಡಿಕೊಂಡ ಸತ್ಯಾಂಶವನ್ನು
ಆಕೆ ಗುಪ್ತವಾಗಿಡಬಹುದು. 14ಆದರೆ ಗಂಡನು ಈರ್ಷೆ
ಉಳ್ಳವನಾಗಿ ತನ್ನ ಹೆಂಡತಿ ತನ್ನನ್ನು ಅಶುದ್ಧಳನ್ನಾಗಿ
ಮಾಡಿಕೊಂಡಿದ್ದಾಳೆ ಎಂದು ಸಂಶಯ ಪಡುವುದಾಗಿದ್ದರೆ
ಅವಳು ಮಾಡಿಕೊಂಡಿರಲೀ ಮಾಡಿಕೊಂಡಿಲ್ಲದಿರಲೀ
15ಅವನು ಮೂರು ಸೇರು ಗೋಧಿಹಿಟ್ಟನ್ನು ಕಾಣಿಕೆ
ಯಾಗಿ ಯಾಜಕನಿಗೆ ತಂದು ಕೊಡಬೇಕು. ಅವನು ಅದರ
ಮೇಲೆ ಎಣ್ಣೆ ಹಾಕಬಾರದು; ಅವನು ಅದರ ಮೇಲೆ
ಧೂಪ ಹಾಕಬಾರದು; ಯಾಕಂದರೆ ಇದು ಈರ್ಷೆಯುಳ್ಳ
ಗಂಡನ ಧಾನ್ಯಸಮರ್ಪಣೆಯಾಗಿದೆ. ಆಕೆಯ ದೋಷ
ವನ್ನು ಹೊರಪಡಿಸಲು ಕೊಟ್ಟಂಥ ಧಾನ್ಯಸಮರ್ಪಣೆ
ಇದಾಗಿದೆ. 16‘‘ಯಾಜಕನು ಅವಳನ್ನು ಸಮೀಪಕ್ಕೆ ತಂದು
ಯೆಹೋವನ ಎದುರಿನಲ್ಲಿ ನಿಲ್ಲಿಸಬೇಕು. 17ಬಳಿಕ
ಅವನು ಮಣ್ಣಿನ ಪಾತ್ರೆಯಲ್ಲಿ ಸ್ವಲ್ಪ ಪವಿತ್ರ ಜಲವನ್ನು
ತೆಗೆದುಕೊಂಡು ಪವಿತ್ರಗುಡಾರದ ನೆಲದಿಂದ ಸ್ವಲ್ಪ
ಧೂಳನ್ನು ಆ ನೀರಿನಲ್ಲಿ ಹಾಕಬೇಕು. 18ಯಾಜಕನು
ಅವಳನ್ನು ಯೆಹೋವನ ಮುಂದೆ ನಿಲ್ಲಿಸಿ ಅವಳ ತಲೆಯ
ಕೂದಲನ್ನು ಕೆದರಿಸಿ ಆಕೆಯ ದೋಷವನ್ನು ಹೊರ
ಪಡಿಸುವ ಧಾನ್ಯಸಮರ್ಪಣೆಯನ್ನು ಅವಳ ಕೈಯಲ್ಲಿ
ಇಡಬೇಕು. ಅದು ಈರ್ಷೆಯುಳ್ಳ ಗಂಡನ ಧಾನ್ಯ
ಸಮರ್ಪಣೆ. ಅದೇ ಸಮಯದಲ್ಲಿ ಶಾಪವನ್ನು ಉಂಟು
ಮಾಡುವ ನೀರಿನ ವಿಶೇಷ ಪಾತ್ರೆಯನ್ನು ಯಾಜಕನು ತನ್ನ
ಕೈಯಲ್ಲಿ ಹಿಡಿದುಕೊಳ್ಳಬೇಕು.
19‘‘ಬಳಿಕ ಯಾಜಕನು ಸ್ತ್ರೀಗೆ ಸುಳ್ಳಾಡದೆ ಸತ್ಯವನ್ನೇ
ಹೇಳಬೇಕೆಂದು ಪ್ರಮಾಣ ಮಾಡಿಸುವನು. ಯಾಜಕನು
ಅವಳಿಗೆ ಹೀಗನ್ನಬೇಕು: ‘ನೀನು ಪರಪುರುಷನ ಸಂಗ
ಮಾಡದೆ ಗಂಡನ ಅಧೀನದಲ್ಲಿದ್ದು ಪಾತಿವ್ರತ್ಯವನ್ನು
ಬಿಡದೆ ದುಷ್ಕಾರ್ಯವನ್ನು ಮಾಡದೆ ಇರುವವಳಾದರೆ,
ಶಾಪವನ್ನು ಉಂಟುಮಾಡುವ ಕಹಿನೀರಿನಿಂದ ನಿನಗೆ
ಹಾನಿಯಾಗಬಾರದು.
20ಆದರೆ ನೀನು ನಿನ್ನ ಗಂಡನಲ್ಲದ ಪರಪುರುಷ
ನೊಡನೆ ಸಂಗಮಾಡಿ ನಿನ್ನ ಗಂಡನಿಗೆ ವಿರುದ್ಧವಾಗಿ ಪಾಪ
ಮಾಡಿದ್ದರೆ, ನೀನು ಶುದ್ಧಳಲ್ಲ. 21ಆದ್ದರಿಂದ ನೀನು ಈ
ವಿಶೇಷ ಜಲವನ್ನು ಕುಡಿಯುವಾಗ, ನಿನಗೆ ಹಾನಿ
ಯುಂಟಾಗುವುದು. ನಿನಗೆ ಮಕ್ಕಳಾಗುವುದಿಲ್ಲ. ನೀನು
ಬಸುರಾಗಿದ್ದರೆ, ನಿನ್ನ ಮಗು ಸಾಯುವುದು. ಆಗ ನಿನ್ನ

ಜನರು ನಿನ್ನನ್ನು ದೂರಮಾಡಿ ನಿನ್ನ ವಿರುದ್ಧವಾಗಿ ಕೆಟ್ಟ ಸಂಗತಿಗಳನ್ನು ಹೇಳುವರು.'

''ಬಳಿಕ ಯಾಜಕನು ಆ ಸ್ತ್ರೀಗೆ ಪ್ರಮಾಣ ಮಾಡಲು ಹೇಳಬೇಕು. ಅವಳು, 'ನಾನು ಸುಳ್ಳಾಡಿದ್ದರೆ, ಈ ಕೆಟ್ಟ ಸಂಗತಿಗಳು ನನಗೆ ಸಂಭವಿಸಲಿ' ಎಂದು ಹೇಳಬೇಕು.
22ಯಾಜಕನು, 'ಹಾನಿಯನ್ನು ಉಂಟುಮಾಡುವ ಈ ನೀರನ್ನು ನೀನು ಕುಡಿಯಬೇಕು. ನೀನು ಪಾಪ ಮಾಡಿದ್ದರೆ ನಿನಗೆ ಮಕ್ಕಳಾಗುವುದಿಲ್ಲ ಮತ್ತು ನೀನು ಪಡೆಯುವ ಮಗು ಹುಟ್ಟುವ ಮೊದಲೇ ಸಾಯುವುದು' ಎಂದು ಹೇಳಬೇಕು. ಅದಕ್ಕೆ ಸ್ತ್ರೀಯು, 'ಹಾಗೆಯೇ ಆಗಲಿ' ಎಂದು ಹೇಳಬೇಕು.

23''ಯಾಜಕನು ಈ ಶಾಪಗಳನ್ನು ಒಂದು ಸುರುಳಿ ಯಲ್ಲಿ ಬರೆಯಬೇಕು. ಬಳಿಕ ಆ ಕಹಿ ನೀರಿನಿಂದ ಆ ಸುರುಳಿಯ ವಾಕ್ಯವನ್ನು ತೊಳೆಯಬೇಕು.
24ಆಮೇಲೆ ಶಾಪವನ್ನು ಬರಮಾಡುವ ಆ ನೀರನ್ನು ಆ ಸ್ತ್ರೀಗೆ ಕುಡಿಸ ಬೇಕು. ಈ ನೀರು ಅವಳೊಳಗೆ ಸೇರುವುದು. ಅವಳು ದೋಷಿಯಾಗಿದ್ದರೆ ಅವಳಿಗೆ ಮಹಾಸಂಕಟವನ್ನುಂಟು ಮಾಡುವುದು.

25''ಯಾಜಕನು ಈರ್ಷೆಯುಳ್ಳ ಗಂಡನ ಧಾನ್ಯ ಸಮರ್ಪಣೆಯನ್ನು ಆಕೆಯ ಕೈಗಳಿಂದ ತೆಗೆದುಕೊಂಡು ಅದನ್ನು ಯೆಹೋವನ ಮುಂದೆ ಪ್ರತಿಷ್ಠಿಸಿ, ಬಳಿಕ ಅದನ್ನು ವೇದಿಕೆಯ ಮೇಲೆ ಅರ್ಪಿಸಬೇಕು.
26ಯಾಜಕನು ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ ಆ ಹಿಟ್ಟಿನಲ್ಲಿ ಒಂದು ಹಿಡಿಯನ್ನು ತೆಗೆದುಕೊಂಡು ಯಜ್ಞವೇದಿಕೆಯ ಮೇಲೆ ಹೋಮಮಾಡಬೇಕು. ತರುವಾಯ ಅವನು ಆ ನೀರನ್ನು ಕುಡಿಯಲು ಸ್ತ್ರೀಗೆ ಕೊಡಬೇಕು.
27ಅವಳು ಅಶುದ್ಧಳಾಗಿದ್ದರೆ ಮತ್ತು ತನ್ನ ಗಂಡನಿಗೆ ವಿರುದ್ಧವಾಗಿ ಪಾಪಮಾಡಿದ್ದರೆ, ನೀರು ಅವಳಿಗೆ ಹಾನಿಯನ್ನು ಉಂಟು ಮಾಡುವುದು, ನೀರು ಅವಳೊಳಗೆ ಹೋಗಿ ಅವಳಿಗೆ ಮಹಾಸಂಕಟವನ್ನು ಉಂಟುಮಾಡುವುದು. ನೀರು ಅವಳನ್ನು ಆ ಕೂಡಲೇ ಬಂಜೆಯನ್ನಾಗಿ ಮಾಡುವುದು. ಅವಳು ತನ್ನ ಜನರ ಮಧ್ಯದಲ್ಲಿ ಶಾಪಗ್ರಸ್ತಳಾಗಿರುವಳು.
28ಆದರೆ ಅವಳು ತನ್ನ ಗಂಡನಿಗೆ ವಿರುದ್ಧವಾಗಿ ಪಾಪ ಮಾಡದೆ ಶುದ್ಧಳಾಗಿದ್ದರೆ, ಯಾಜಕನು ಅವಳನ್ನು ದೋಷಿ ಯಲ್ಲವೆಂದು ಹೇಳುವನು. ಆಗ ಅವಳಿಗೆ ಯಾವ ಹಾನಿ ಯಾಗದೆ, ಇನ್ನೂ ಮಕ್ಕಳನ್ನು ಹಡೆಯಲು ಶಕ್ತ ಳಾಗಿರುವಳು.

29''ಇದೇ ವ್ಯಭಿಚಾರ ಸಂಶಯವನ್ನು ಪರಿಹರಿಸುವ ವಿಧಿ. ಗಂಡನ ಸ್ವಾಧೀನದಲ್ಲಿರುವ ಹೆಂಡತಿಯು
30ಪಾತಿವ್ರತ್ಯವನ್ನು ಬಿಟ್ಟು ಜಾರತ್ವ ಮಾಡಿರುವಾಗಲೂ ಗಂಡನು ಹೆಂಡತಿಯ ವಿಷಯದಲ್ಲಿ ಸಂಶಯ ಪಡು ವಾಗಲೂ ಅವನು ಮಾಡಬೇಕಾದದ್ದು ಇದೇ. ಯಾಜ ಕನು ಸ್ತ್ರೀಗೆ ಯೆಹೋವನ ಮುಂದೆ ನಿಲ್ಲಲು ಹೇಳಬೇಕು. ಆಗ ಯಾಜಕನು ಈ ಎಲ್ಲಾ ಸಂಗತಿಗಳನ್ನು ಮಾಡುವನು. ಇದು ನಿಯಮವಾಗಿದೆ.
31ಗಂಡನು ನಿರಪರಾಧಿ ಯಾಗಿರುವನು. ಆದರೆ ಸ್ತ್ರೀಯು ಪಾಪ ಮಾಡಿದ್ದರೆ, ಆಕೆ ಅದರ ಫಲವನ್ನು ಅನುಭವಿಸಬೇಕು.''

## ನಾಜೀರವ್ರತ

6 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
2''ಈ ಸಂಗತಿಗಳನ್ನು ಇಸ್ರೇಲರಿಗೆ ಹೇಳು: ಯಾವ ಪುರುಷ ನಾಗಲೀ ಸ್ತ್ರೀಯಾಗಲೀ ನಾಜೀರವ್ರತವನ್ನು ಹೇಳು ವುದರ ಮೂಲಕ ತನ್ನನ್ನು ಪ್ರತಿಷ್ಠಿಸಿಕೊಂಡರೆ, ಯೆಹೋವನಿಗೋಸ್ಕರ ಹರಕೆ ಮಾಡಿಕೊಂಡರೆ,
3ಆ ಸಮಯದಲ್ಲಿ ಅವನು ದ್ರಾಕ್ಷಾರಸವನ್ನಾಗಲೀ ಮದ್ಯ ವನ್ನಾಗಲೀ ಕುಡಿಯಬಾರದು; ದ್ರಾಕ್ಷಾರಸದ ಹುಳಿಯ ನ್ನಾಗಲೀ ಬೇರೆ ಮದ್ಯದ ಹುಳಿಯನ್ನಾಗಲೀ ಕುಡಿಯ ಬಾರದು; ದ್ರಾಕ್ಷೆಹಣ್ಣಿನಿಂದ ಮಾಡಿದ ಯಾವ ಪಾನ ವನ್ನೂ ಕುಡಿಯಬಾರದು; ಹಸಿ ಅಥವಾ ಒಣ ದ್ರಾಕ್ಷೆ ಯನ್ನು ತಿನ್ನಬಾರದು;

4ಅವನು ಹರಕೆ ಮಾಡಿಕೊಂಡಿರುವ ದಿನಗಳಲ್ಲಿ ದ್ರಾಕ್ಷಾಲತೆಯಿಂದ ಉತ್ಪನ್ನವಾಗುವ ಯಾವದನ್ನೂ ತಿನ್ನ ಬಾರದು. ಅವನು ದ್ರಾಕ್ಷೆಯ ಬೀಜವನ್ನಾಗಲೀ ಸಿಪ್ಪೆಯ ನ್ನಾಗಲೀ ತಿನ್ನಬಾರದು.

5''ಅವನ ವ್ರತದ ಕಾಲದಲ್ಲಿ ಕ್ಷೌರದ ಕತ್ತಿಯು ಅವನ ತಲೆಯನ್ನು ಸೋಂಕಬಾರದು. ಯೆಹೋವನಿಗೋಸ್ಕರ ಪ್ರತಿಷ್ಠಿತವಾದ ತನ್ನ ಕಾಲವನ್ನು ಪೂರ್ಣಗೊಳಿಸುವ ತನಕ ಅವನು ಪರಿಶುದ್ಧನಾಗಿರಬೇಕು. ತನ್ನ ವ್ರತದ ದಿನಗಳು ಮುಗಿಯುವ ತನಕ ಅವನು ಕೂದಲನ್ನು ಬೆಳೆಸಿ ಕೊಳ್ಳಬೇಕು.*

6''ಅವನು ಯೆಹೋವನಿಗೋಸ್ಕರ ಹರಕೆ ಮಾಡಿ ಕೊಂಡ ಕಾಲವೆಲ್ಲಾ, ಶವದ ಬಳಿಗೆ ಹೋಗಕೂಡದು.
7ಅವನ ತಂದೆ, ತಾಯಿ, ಸಹೋದರ, ಸಹೋದರಿ ಸತ್ತರೂ ಅವನು ಅವರ ಹೆಣವನ್ನು ಮುಟ್ಟಬಾರದು. ಮುಟ್ಟಿದರೆ ಅವನು ಅಶುದ್ಧನಾಗುವನು. ದೇವರಿಗೋಸ್ಕರ ಮೀಸ ಲಾಗಿರುವ ಅವನ ಕೂದಲು ಅವನ ತಲೆಯನ್ನು ಮುಚ್ಚಿ ಕೊಂಡಿರುತ್ತದೆ; ಆದ್ದರಿಂದ ಅವನು ಪರಿಶುದ್ಧನಾಗಿರ ಬೇಕು.
8ಅವನು ತನ್ನನ್ನು ಪ್ರತಿಷ್ಠಿಸಿಕೊಂಡ ದಿನಗಳಲ್ಲೆಲ್ಲಾ ಅವನು ಯೆಹೋವನಿಗೆ ಪವಿತ್ರನಾಗಿರಬೇಕು.

9''ಯಾವನಾದರೂ ಇದ್ದಕ್ಕಿದ್ದಂತೆ ಅವನ ಬಳಿಯಲ್ಲೇ ಸತ್ತದ್ದರಿಂದ ತಾನು ಪ್ರತಿಷ್ಠಿಸಿಕೊಂಡ ತಲೇ ಕೂದಲು ಅಪವಿತ್ರವಾದರೆ ಏಳನೆಯ ದಿನದಲ್ಲಿ ತಲೆಯನ್ನು ಕ್ಷೌರ

**ಬೆಳೆಸಿಕೊಳ್ಳಬೇಕು** ವ್ರತದ ದಿನಗಳು ಮುಗಿದ ಮೇಲೆ ನಾಜೀರನು ತನ್ನ ಕೂದಲನ್ನು ಕತ್ತರಿಸಿ ಅದನ್ನು ದೇವರಿಗೆ ಕಾಣಿಕೆಯಾಗಿ ಕೊಡುವನು.

ಮಾಡಿಸಿಕೊಳ್ಳಬೇಕು. 10 ಬಳಿಕ ಎಂಟನೆಯ ದಿನದಲ್ಲಿ
ಅವನು ಎರಡು ಕಾಡುಪಾರಿವಾಳವನ್ನಾಗಲೀ ಎರಡು
ಪಾರಿವಾಳದ ಮರಿಗಳನ್ನಾಗಲೀ ದೇವದರ್ಶನ
ಗುಡಾರದ ಪ್ರವೇಶದ್ವಾರದ ಬಳಿಯಿರುವ ಯಾಜಕನಿಗೆ
ತಂದುಕೊಡಬೇಕು. 11 ಆಗ ಯಾಜಕನು ಒಂದನ್ನು ಪಾಪ
ಪರಿಹಾರಕ ಯಜ್ಞವಾಗಿಯೂ ಇನ್ನೊಂದನ್ನು ಸರ್ವಾಂಗ
ಹೋಮವಾಗಿಯೂ ಅರ್ಪಿಸುವನು. ಈ ಸರ್ವಾಂಗ
ಹೋಮವು ಅವನಿಗೆ ಪ್ರಾಯಶ್ಚಿತ್ತ ಯಜ್ಞವಾಗಿದೆ.
(ಅವನಿಗೆ ಹೆಣವು ಸೋಂಕಿದ್ದರಿಂದ ಅಶುದ್ಧನಾದನು.)
ಆ ಸಮಯದಲ್ಲಿ, ಅವನು ತನ್ನ ತಲೆಕೂದಲನ್ನು
ಯೆಹೋವನಿಗೆ ಕಾಣಿಕೆಯಾಗಿ ಮತ್ತೆ ಹರಕೆ
ಮಾಡುವನು. 12 ಅವನು ಮತ್ತೊಮ್ಮೆ ನಿರ್ದಿಷ್ಟ ಕಾಲ
ದವರೆಗೆ ತನ್ನನ್ನು ಯೆಹೋವನಿಗೆ ಪ್ರತಿಷ್ಠಿಸಿಕೊಳ್ಳ
ಬೇಕೆಂಬುದೇ ಇದರರ್ಥ. ಅವನು ಒಂದು ವರ್ಷದ
ಕುರಿಮರಿಯನ್ನು ತಂದು ಅದನ್ನು ದೋಷಪರಿಹಾರಕ
ಯಜ್ಞಕ್ಕಾಗಿ ಕೊಡಬೇಕು. ಶವವು ಅವನನ್ನು ಅಶುದ್ಧ
ನನ್ನಾಗಿ ಮಾಡಿದ್ದರಿಂದ ಮೊದಲಿನ ದಿನಗಳು ಲೆಕ್ಕಿಸ
ಲ್ಪಡುವುದಿಲ್ಲ. (ಅವನು ಮತ್ತೊಮ್ಮೆ ಆರಂಭಿಸಬೇಕು.)
13 ‘‘ವ್ರತದ ದಿನಗಳು ಮುಗಿದ ನಂತರ, ಮಾಡಬೇಕಾದ
ಕ್ರಮ: ಅವನು ದೇವದರ್ಶನಗುಡಾರದ ಪ್ರವೇಶದ್ವಾರದ
ಬಳಿಗೆ ಬಂದು 14 ಯೆಹೋವನಿಗೆ ತನ್ನ ಸಮರ್ಪಣೆಯನ್ನು
ಮಾಡಬೇಕು. ಅವನು ಸಮರ್ಪಿಸಬೇಕಾದುದು
ಯಾವದೆಂದರೆ,

ಸರ್ವಾಂಗಹೋಮಕ್ಕೆ ದೋಷವಿಲ್ಲದ ಒಂದು
ವರ್ಷದ ಗಂಡು ಕುರಿಮರಿ, ದೋಷ ಪರಿಹಾರ
ಯಜ್ಞಕ್ಕಾಗಿ ಯಾವ ದೋಷವಿಲ್ಲದ ಒಂದು
ವರುಷದ ಹೆಣ್ಣು ಕುರಿಮರಿ, ಸಮಾಧಾನ ಯಜ್ಞ
ಕ್ಕಾಗಿ ಯಾವ ದೋಷವಿಲ್ಲದ ಒಂದು ಟಗರು,
15 ಶುದ್ಧವಾದ ಹಿಟ್ಟಿನಿಂದ ಮತ್ತು ಎಣ್ಣೆಯಿಂದ
ಮಾಡಿದ ಹುಳಿಯಿಲ್ಲದ ರೊಟ್ಟಿಗಳನ್ನೂ ಎಣ್ಣೆ
ಹಾಕಿ ಮಾಡಿದ ಹುಳಿಯಿಲ್ಲದ ತೆಳುವಾದ ರೊಟ್ಟಿ
ಗಳನ್ನೂ ಒಂದು ಪುಟ್ಟಿ ತುಂಬಾ ಸಮರ್ಪಿಸ
ಬೇಕು; ಅಲ್ಲದೆ ಮೇಲೆ ವಿವರಿಸಿದ ಯಜ್ಞಗ
ಳೊಡನೆ ಕೊಡಬೇಕಾದ ಧಾನ್ಯ ದ್ರವ್ಯಗಳನ್ನೂ
ಪಾನದ್ರವ್ಯಗಳನ್ನೂ ಸಮರ್ಪಿಸಬೇಕು.

16 ಬಳಿಕ ಯಾಜಕನು ಇವುಗಳನ್ನು ಯೆಹೋವನ ಬಳಿಗೆ
ತಂದು ದೋಷಪರಿಹಾರಕ ಯಜ್ಞವನ್ನೂ ಸರ್ವಾಂಗ
ಹೋಮವನ್ನೂ ಮಾಡುವನು. 17 ಯಾಜಕನು ಹುಳಿ
ಯಿಲ್ಲದ ರೊಟ್ಟಿಯಿರುವ ಪುಟ್ಟಿಯನ್ನು ಯೆಹೋವನಿಗೆ
ಸಮರ್ಪಿಸುವನು. ಬಳಿಕ ಅವನು ಟಗರನ್ನು ವಧಿಸಿ
ಸಮಾಧಾನ ಯಜ್ಞವಾಗಿ ಅರ್ಪಿಸುವನು. ಅವನು ಅದನ್ನು
ಧಾನ್ಯಸಮರ್ಪಣೆ ಮತ್ತು ಪಾನದ್ರವ್ಯ ಸಮರ್ಪಣೆ
ಯೊಂದಿಗೆ ಅರ್ಪಿಸುವನು.
18 ‘‘ನಾಜೀರವ್ರತವನ್ನು ಆಚರಿಸುತ್ತಿರುವವನು
ಯೆಹೋವನಿಗಾಗಿ ಪ್ರತಿಷ್ಠಿಸಿದ್ದ ತಲೆಕೂದಲನ್ನು ದೇವ
ದರ್ಶನಗುಡಾರದ ಪ್ರವೇಶದ್ವಾರದ ಬಳಿ ಕ್ಷೌರಮಾಡಿಸಿ
ಕೊಳ್ಳಬೇಕು. ಆ ಕೂದಲನ್ನು ಸಮಾಧಾನಯಜ್ಞದ್ರವ್ಯಗಳ
ಕೆಳಗಿರುವ ಬೆಂಕಿಯಲ್ಲಿ ಹಾಕಬೇಕು.
19 ‘‘ನಾಜೀರನು ತನ್ನ ತಲೆಕೂದಲನ್ನು ಕ್ಷೌರಮಾಡಿಸಿ
ಕೊಂಡ ನಂತರ, ಯಾಜಕನು ಅವನಿಗೆ ಆ ಟಗರಿನ ಬೆಂದ
ಮುಂದೊಡೆಯನ್ನೂ ಪುಟ್ಟಿಯಲ್ಲಿನ ಒಂದು ಹುಳಿ
ಯಿಲ್ಲದ ಸಿಹಿರೊಟ್ಟಿಯನ್ನೂ ಒಂದು ಹುಳಿಯಿಲ್ಲದ
ತೆಳುವಾದ ರೊಟ್ಟಿಯನ್ನೂ ಅವನ ಕೈಯಲ್ಲಿ ಇಡಬೇಕು.
20 ನೈವೇದ್ಯವಾಗಿ ಅದನ್ನು ಯೆಹೋವನ ಸನ್ನಿಧಿಯಲ್ಲಿ
ವಿಶೇಷ ಕಾಣಿಕೆಯಾಗಿ ನಿವಾಳಿಸಬೇಕು. ಇವುಗಳು
ಪವಿತ್ರವಾಗಿದ್ದು ಯಾಜಕರ ಪಾಲಾಗುತ್ತವೆ. ಅಲ್ಲದೆ
ಮೀಸಲಾಗಿಟ್ಟಿರುವ ನಿವಾಳಿಸಲ್ಪಟ್ಟ ಕಾಣಿಕೆಯ ಎದೆಯ
ಭಾಗ ಮತ್ತು ತೊಡೆಯಭಾಗ ಸಹ ಯಾಜಕನ ಭಾಗ
ವಾಗಿರುತ್ತದೆ. ಇದರ ನಂತರ ನಾಜೀರನು ದ್ರಾಕ್ಷಾ
ರಸವನ್ನು ಕುಡಿಯಬಹುದು.
21 ‘‘ಇದೇ ನಾಜೀರರ ವ್ರತ ವಿಧಿ. ಅವರು ತಮ್ಮ ವ್ರತ
ಪೂರ್ತಿಗಾಗಿ ಯೆಹೋವನಿಗೆ ಸಮರ್ಪಿಸಬೇಕಾದ
ಕಾಣಿಕೆ ಇದೇ. ಅವರು ತಮ್ಮ ಶಕ್ತ್ಯಾನುಸಾರ ಹೆಚ್ಚಾ
ಗಿಯೂ ಕೊಡಬಹುದು. ಆದರೆ ತಾವು ಕೊಡುತ್ತೇವೆಂದು
ಹರಕೆ ಮಾಡಿದಷ್ಟನ್ನು ವ್ರತವಿಧಿಗನುಸಾರವಾಗಿ ಕೊಡಲೇ
ಬೇಕು.’’

## ಯಾಜಕರು ಹೇಳಬೇಕಾದ ಆಶೀರ್ವಚನವು

22 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
23 ‘‘ನೀನು ಆರೋನನಿಗೂ ಅವನ ಪುತ್ರರಿಗೂ ಹೀಗೆ
ಆಜ್ಞಾಪಿಸು: ‘ನೀವು ಇಸ್ರೇಲರನ್ನು ಆಶೀರ್ವದಿಸುವಾಗ
ಈ ಪ್ರಕಾರ ಹೇಳಬೇಕು:

24 ಯೆಹೋವನು ನಿಮ್ಮನ್ನು ಆಶೀರ್ವದಿಸಿ
ಕಾಪಾಡಲಿ.
25 ಯೆಹೋವನು ನಿಮ್ಮನ್ನು ಕನಿಕರದಿಂದ ನೋಡಿ
ನಿಮ್ಮ ಮೇಲೆ ದಯವಿಡಲಿ.
26 ಯೆಹೋವನು ನಿಮ್ಮ ಮೇಲೆ ಕೃಪಾಕಟಾಕ್ಷವಿಟ್ಟು
ಶಾಂತಿಯನ್ನು ಅನುಗ್ರಹಿಸಲಿ.’’

27 ಬಳಿಕ ಯೆಹೋವನು, ‘‘ಹೀಗೆ ಆರೋನನೂ
ಅವನ ಪುತ್ರರೂ ಇಸ್ರೇಲರನ್ನು ನನ್ನ ಹೆಸರಿನಿಂದ

ಆಶೀರ್ವದಿಸುವುದರಿಂದ ನಾನು ಅವರನ್ನು ಆಶೀರ್ವದಿ
ಸುವೆನು'' ಎಂದನು.

## ಪವಿತ್ರಗುಡಾರದ ಪ್ರತಿಷ್ಠೆ

7 ಮೋಶೆ ಪವಿತ್ರಗುಡಾರದ ನಿರ್ಮಾಣಕಾರ್ಯವನ್ನು
ಪೂರ್ಣಗೊಳಿಸಿದಾಗ ಅದನ್ನು ಅದರ ವಸ್ತುಗ
ಳೊಡನೆ, ಯಜ್ಞವೇದಿಕೆಯೊಡನೆ ಮತ್ತು ಅದರ ಎಲ್ಲಾ
ಉಪಕರಣಗಳೊಡನೆ ಯೆಹೋವನಿಗಾಗಿ ಅಭಿಷೇಕಿಸಿ
ಪ್ರತಿಷ್ಠಿಸಿದನು. ಇವು ಯೆಹೋವನ ಆರಾಧನೆಗಾಗಿ
ಮಾತ್ರ ಉಪಯೋಗಿಸಲ್ಪಡುತ್ತವೆಂದು ಹೀಗೆ ಪ್ರತ್ಯೇಕಿಸ
ಲ್ಪಟ್ಟವು. 2 ಬಳಿಕ ಇಸ್ರೇಲಿನ ಪ್ರಧಾನ ಪುರುಷರು, ಅವರ
ಕುಟುಂಬಗಳ ನಾಯಕರು ಅಂದರೆ ಜನಗಣತಿಯ
ಮೇಲ್ವಿಚಾರಣೆಯನ್ನು ಸಹ ವಹಿಸಿಕೊಂಡಿದ್ದ
3 ಗೋತ್ರ ಪ್ರಧಾನರು ಮುಂದೆ ಬಂದು, ತಮ್ಮ ಕಾಣಿಕೆ
ಗಳನ್ನು ಸಮರ್ಪಿಸಿದರು. ಇಬ್ಬಿಬ್ಬರು ಆರುಕಮಾನು
ಬಂಡಿಗಳನ್ನೂ ಅವುಗಳನ್ನು ಎಳೆಯುವುದಕ್ಕೆ ಆರು ಜೊತೆ
ಎತ್ತುಗಳನ್ನೂ ಕೊಟ್ಟರು. ಪ್ರಧಾನರು ಇವುಗಳನ್ನು ಪವಿತ್ರ
ಗುಡಾರದಲ್ಲಿ ಯೆಹೋವನಿಗೆ ಒಪ್ಪಿಸಿದರು.
4 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
5 ''ಪ್ರಧಾನರಿಂದ ಈ ಕಾಣಿಕೆಗಳನ್ನು ಸ್ವೀಕರಿಸು. ಇವು
ದೇವದರ್ಶನಗುಡಾರದ ವರ್ಗಾವಣೆಗೆ ಉಪಯೋಗಿಸ
ಲ್ಪಡಲಿ. ಇವುಗಳನ್ನು ಲೇವಿಯರಿಗೆ ಕೊಡು. ಅವರು
ತಮ್ಮ ಕೆಲಸಗಳನ್ನು ಮಾಡಲು ಇದು ಸಹಾಯ
ಮಾಡುವುದು.''
6 ಆದ್ದರಿಂದ ಮೋಶೆಯು ಬಂಡಿಗಳನ್ನೂ ಎತ್ತುಗಳನ್ನೂ
ಸ್ವೀಕರಿಸಿ ಅವುಗಳನ್ನು ಲೇವಿಯರಿಗೆ ಕೊಟ್ಟನು. 7 ಅವನು
ಗೇರ್ಷೋನ್ ಗೋತ್ರ ಪುರುಷರಿಗೆ ಅವರ ಕೆಲಸಕ್ಕೆ
ಅಗತ್ಯವಾಗಿದ್ದ ಎರಡು ಬಂಡಿಗಳನ್ನು ಮತ್ತು ನಾಲ್ಕು
ಎತ್ತುಗಳನ್ನು ಕೊಟ್ಟನು. 8 ಬಳಿಕ ಮೆರಾರೀಯರ ಕೆಲಸಕ್ಕೆ
ಬೇಕಾಗಿದ್ದ ನಾಲ್ಕು ಬಂಡಿಗಳನ್ನೂ ಎಂಟು ಎತ್ತುಗಳನ್ನೂ
ಅವರಿಗೆ ಕೊಟ್ಟನು. ಇವರೆಲ್ಲರು ಮಾಡುವ ಕೆಲಸಕ್ಕೆ
ಯಾಜಕನಾದ ಆರೋನನ ಮಗನಾದ ಈತಾಮಾರನು
ಮೇಲ್ವಿಚಾರಕನಾಗಿದ್ದನು. 9 ಮೋಶೆಯು ಕೆಹಾತ್ಯರಿಗೆ
ಎತ್ತುಗಳನ್ನಾಗಲೀ ಬಂಡಿಗಳನ್ನಾಗಲೀ ಕೊಡಲಿಲ್ಲ.
ಯಾಕಂದರೆ ಅವರು ಪವಿತ್ರವಸ್ತುಗಳನ್ನು ತಮ್ಮ ಭುಜದ
ಮೇಲೆ ಹೊರಬೇಕು. ಅವರಿಗೆ ಈ ಕೆಲಸವು
ಕೊಡಲ್ಪಟ್ಟಿತು. 10 ವೇದಿಕೆಯು ಅಭಿಷೇಕಿಸಲ್ಪಟ್ಟಾಗ,
ಯಜ್ಞವೇದಿಕೆಯ ಆರಂಭಕ್ಕಾಗಿ ಪ್ರಧಾನರು ಸಹ ತಮ್ಮ
ಕಾಣಿಕೆಗಳನ್ನು ವೇದಿಕೆಯ ಮುಂದೆ ತಂದರು.
11 ಯೆಹೋವನು ಮೋಶೆಗೆ, ''ಪ್ರತಿ ದಿನ ಒಬ್ಬ ಪ್ರಧಾನನು
ವೇದಿಕೆಯ ಪ್ರತಿಷ್ಠೆಗಾಗಿ ತನ್ನ ಕಾಣಿಕೆಯನ್ನು ತರಬೇಕು''
ಎಂದು ಆಜ್ಞಾಪಿಸಿದ್ದನು.

12-83 ಹನ್ನೆರಡು ಪ್ರಧಾನರಲ್ಲಿ ಪ್ರತಿಯೊಬ್ಬನೂ ತನ್ನ
ಕಾಣಿಕೆಯನ್ನು ತಂದನು. ಅವರು ಕೊಟ್ಟ ಕಾಣಿಕೆಗಳು
ಹೀಗಿವೆ: ಪ್ರತಿಯೊಬ್ಬ ಪ್ರಧಾನನು ಮೂರುಕ್ಕಾಲು
ಪೌಂಡು ತೂಕವುಳ್ಳ ಬೆಳ್ಳಿಯ ತಟ್ಟೆಯನ್ನೂ ಒಂದು
ಮುಕ್ಕಾಲು ಪೌಂಡು ತೂಕವುಳ್ಳ ಬೆಳ್ಳಿಯ ಬಟ್ಟಲನ್ನೂ
ತಂದನು. ಇವೆರಡನ್ನೂ ಅಧಿಕೃತ ಅಳತೆಯಿಂದ ತೂಕ
ಮಾಡಲಾಯಿತು. ಧಾನ್ಯಸಮರ್ಪಣೆಗಾಗಿ ಉಪಯೋಗ
ವಾಗುವ ಎಣ್ಣೆ ಬೆರೆಸಿದ ಶ್ರೇಷ್ಠ ಗೋಧಿಹಿಟ್ಟನ್ನು ಬಟ್ಟಲಲ್ಲಿ
ಮತ್ತು ತಟ್ಟೆಯಲ್ಲಿ ತುಂಬಿಡಲಾಗಿತ್ತು. ಧೂಪದ್ರವ್ಯ
ತುಂಬಿದ್ದ ನಾಲ್ಕು ತೊಲೆ ತೂಕವುಳ್ಳ ಚಿನ್ನದ ಧೂಪಾ
ರತಿಯನ್ನೂ ಒಂದು ಎಳೆಯ ಹೋರಿಯನ್ನೂ ಸರ್ವಾಂಗ
ಹೋಮಕ್ಕಾಗಿ ಒಂದು ಹೋರಿಯನ್ನೂ ಒಂದು
ಟಗರನ್ನೂ ಒಂದು ವರುಷದ ಗಂಡು ಕುರಿಮರಿಯನ್ನೂ
ಪಾಪಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನೂ
ಎರಡು ಎತ್ತುಗಳನ್ನೂ ಐದು ಟಗರುಗಳನ್ನೂ ಐದು
ಹೋತಗಳನ್ನೂ ಐದು ಒಂದು ವರುಷದ ಗಂಡು
ಕುರಿಮರಿಗಳನ್ನೂ ಪ್ರತಿಯೊಬ್ಬ ಯಾಜಕನೂ ತಂದನು.
ಇವೆಲ್ಲವೂ ಸಮಾಧಾನ ಯಜ್ಞವಾಗಿ ಸಮರ್ಪಿಸಲ್ಪಟ್ಟವು.

ಮೊದಲನೆಯ ದಿನದಲ್ಲಿ ಯೆಹೂದ ಕುಲಾಧಿಪತಿ
ಅಮ್ಮೀನಾದಾಬನ ಮಗನಾದ ನಹಶೋನನು ತನ್ನ
ಕಾಣಿಕೆಗಳನ್ನು ತಂದನು.

ಎರಡನೆ ದಿನದಲ್ಲಿ ಇಸ್ಸಾಕಾರ್ ಕುಲಾಧಿಪತಿ
ಚೂವಾರನ ಮಗನಾದ ನೆತನೇಲನು ತನ್ನ ಕಾಣಿಕೆಗಳನ್ನು
ತಂದನು.

ಮೂರನೆಯ ದಿನದಲ್ಲಿ ಜೆಬುಲೂನ್ ಕುಲಾಧಿಪತಿ
ಹೇಲೋನನ ಮಗನಾದ ಎಲೀಯಾಬನು ತನ್ನ ಕಾಣಿಕೆ
ಗಳನ್ನು ತಂದನು.

ನಾಲ್ಕನೆಯ ದಿನದಲ್ಲಿ ರೂಬೇನ್ ಕುಲಾಧಿಪತಿ
ಶೆದೇಯೂರನ ಮಗನಾದ ಎಲೀಚೂರನು ತನ್ನ
ಕಾಣಿಕೆಗಳನ್ನು ತಂದನು.

ಐದನೆಯ ದಿನದಲ್ಲಿ ಸಿಮೆಯೋನ್ ಕುಲಾಧಿಪತಿ
ಚೂರೀಷದ್ದೈಯ ಮಗನಾದ ಶೆಲುಮೀಯೇಲನು ತನ್ನ
ಕಾಣಿಕೆಗಳನ್ನು ತಂದನು.

ಆರನೆಯ ದಿನದಲ್ಲಿ ಗಾದ್ ಕುಲಾಧಿಪತಿ ದೆಗೂ
ವೇಲನ ಮಗನಾದ ಎಲ್ಯಾಸಾಫನು ತನ್ನ ಕಾಣಿಕೆಗಳನ್ನು
ತಂದನು.

ಏಳನೆಯ ದಿನದಲ್ಲಿ ಎಫ್ರಾಯೀಮ್ ಕುಲಾಧಿಪತಿ
ಅಮ್ಮೀಹೂದನ ಮಗನಾದ ಎಲೀಷಾಮನು ತನ್ನ
ಕಾಣಿಕೆಗಳನ್ನು ತಂದನು.

ಎಂಟನೆಯ ದಿನದಲ್ಲಿ ಮನಸ್ಸೆ ಕುಲಾಧಿಪತಿ
ಪೆದಾಚೂರನ ಮಗನಾದ ಗಮ್ಲೀಯೇಲನು ತನ್ನ
ಕಾಣಿಕೆಗಳನ್ನು ತಂದನು.

ಒಂಭತ್ತನೆಯ ದಿನದಲ್ಲಿ ಬೆನ್ಯಾಮೀನ್ ಕುಲಾಧಿಪತಿ ಗಿದ್ಯೋನನ ಮಗನಾದ ಅಬೀದಾನನು ತನ್ನ ಕಾಣಿಕೆಗಳನ್ನು ತಂದನು.

ಹತ್ತನೆಯ ದಿನದಲ್ಲಿ ದಾನ್ ಕುಲಾಧಿಪತಿ ಅಮ್ಮೀಷದ್ದೈನ ಮಗನಾದ ಅಹೀಗೆಜರನು ತನ್ನ ಕಾಣಿಕೆಗಳನ್ನು ತಂದನು.

ಹನ್ನೊಂದನೆಯ ದಿನದಲ್ಲಿ ಆಶೇರ್ ಕುಲಾಧಿಪತಿ ಒಕ್ರಾನನ ಮಗನಾದ ಪಗೀಯೇಲನು ತನ್ನ ಕಾಣಿಕೆಗಳನ್ನು ತಂದನು.

ಹನ್ನೆರಡನೆಯ ದಿನದಲ್ಲಿ ನಫ್ತಾಲಿಯ ಕುಲಾಧಿಪತಿ ಏನಾನನ ಮಗನಾದ ಅಹೀರನು ತನ್ನ ಕಾಣಿಕೆಗಳನ್ನು ತಂದನು.

84ಅವೆಲ್ಲವೂ ಇಸ್ರೇಲರ ಪ್ರಧಾನರು ತಂದ ಕಾಣಿಕೆ
ಗಳು. ಯಜ್ಞವೇದಿಕೆಯನ್ನು ಅಭಿಷೇಕಿಸಿ ಪ್ರತಿಷ್ಠಿಸಿದಾಗ
ಯಜ್ಞವೇದಿಕೆಗೋಸ್ಕರ ಅವರು ಕೊಟ್ಟ ಕಾಣಿಕೆಗಳು
ಇವುಗಳೇ. ಅವರು ಹನ್ನೆರಡು ಬೆಳ್ಳಿಯ ತಟ್ಟೆಗಳನ್ನೂ
ಹನ್ನೆರಡು ಬೆಳ್ಳಿಯ ಬಟ್ಟಲುಗಳನ್ನೂ ಹನ್ನೆರಡು ಚಿನ್ನದ
ಧೂಪಾರತಿಗಳನ್ನೂ ತಂದರು. 85ಪ್ರತಿಯೊಂದು ಬೆಳ್ಳಿಯ
ತಟ್ಟೆಯ ತೂಕ ಸುಮಾರು ಮೂರುಕ್ಕಾಲು ಪೌಂಡುಗಳು,
ಪ್ರತಿ ಬಟ್ಟಲು ಸುಮಾರು ಮೂರುಮುಕ್ಕಾಲು ಪೌಂಡು
ತೂಕವುಳ್ಳದ್ದಾಗಿದ್ದವು. ಬೆಳ್ಳಿಯ ತಟ್ಟೆಗಳು ಮತ್ತು ಬೆಳ್ಳಿಯ
ಬಟ್ಟಲುಗಳು ಒಟ್ಟಿಗೆ ಅಧಿಕೃತ ಅಳತೆಯ ಪ್ರಕಾರ
ಅರವತ್ತು ಪೌಂಡುಗಳಷ್ಟು ತೂಕವಾಗಿದ್ದವು. 86ಧೂಪ
ವುಳ್ಳ ಹನ್ನೆರಡು ಚಿನ್ನದ ಧೂಪಾರತಿಗಳಲ್ಲಿ ಪ್ರತಿಯೊಂದು
ಅಧಿಕೃತ ಅಳತೆಯ ಪ್ರಕಾರ ನಾಲ್ಕು ತೊಲೆ ತೂಕವುಳ್ಳ
ದ್ದಾಗಿತ್ತು. ಹನ್ನೆರಡು ಚಿನ್ನದ ಧೂಪಾರತಿಗಳು ಒಟ್ಟಿಗೆ
ಮೂರು ಪೌಂಡುಗಳಷ್ಟು ತೂಕವುಳ್ಳದ್ದಾಗಿತ್ತು.
87ಸರ್ವಾಂಗಹೋಮಕ್ಕಾಗಿ ಉಪಯೋಗಿಸಲ್ಪಟ್ಟ ಒಟ್ಟು
ಪಶುಗಳು: ಹನ್ನೆರಡು ಹೋರಿಗಳು, ಹನ್ನೆರಡು ಟಗರು
ಗಳು, (ಒಂದು ವರುಷದ ಎರಡು ಗಂಡು ಕುರಿಮರಿಗಳು.
ಆ ಸಮರ್ಪಣೆಗಳೊಂದಿಗೆ ಧಾನ್ಯ ಸಮರ್ಪಣೆಗಳೂ
ಅರ್ಪಿಸಲ್ಪಟ್ಟವು. ಪಾಪಪರಿಹಾರಕ ಯಜ್ಞವಾಗಿ ಹನ್ನೆ
ರಡು ಹೋತಗಳು ಯೆಹೋವನಿಗೆ ಸಮರ್ಪಿಸಲ್ಪಟ್ಟವು.
88ಸಮಾಧಾನ ಯಜ್ಞಕ್ಕಾಗಿಯೂ ಪ್ರಧಾನರು ಪಶು
ಗಳನ್ನು ಕೊಟ್ಟರು. ಅವುಗಳ ಒಟ್ಟು ಸಂಖ್ಯೆ ಇಪ್ಪತ್ನಾಲ್ಕು
ಹೋರಿಗಳು, ಅರವತ್ತು ಟಗರುಗಳು, ಅರವತ್ತು ಹೋತ
ಗಳು, ಒಂದು ವರುಷದ ಅರವತ್ತು ಗಂಡು ಕುರಿಮರಿ
ಗಳು. ಯಜ್ಞವೇದಿಕೆಯನ್ನು ಅಭೀಷೇಕಿಸಿ ಪ್ರತಿಷ್ಠಿಸಿದಾಗ
ಅದಕೋಸ್ಕರ ಅವರು ಕೊಟ್ಟ ಕಾಣಿಕೆಗಳು ಇವೇ.

89ಮೋಶೆ ಯೆಹೋವನ ಸಂಗಡ ಮಾತಾಡಲು ದೇವ
ದರ್ಶನಗುಡಾರದೊಳಗೆ ಹೋದಾಗ, ಒಡಂಬಡಿಕೆಯ
ಪವಿತ್ರಪೆಟ್ಟಿಗೆಯ ಹೊದಿಕೆಯ ಮೇಲಿದ್ದ ಎರಡು
ಕೆರೂಬಿಗಳ ಮಧ್ಯದಿಂದ ಯೆಹೋವನು ಮಾತಾಡು
ತ್ತಿರುವುದು ಮೋಶೆಗೆ ಕೇಳಿಸಿತು.

### ದೀಪಸ್ತಂಭ

8 ಯೆಹೋವನು ಮೋಶೆಗೆ, 2“ಆರೋನನು (ಪವಿತ್ರ
ಗುಡಾರದ) ದೀಪಸ್ತಂಭದ ಮೇಲಿನ ದೀಪಗಳನ್ನು
ಕ್ರಮಪಡಿಸಲು ಹೇಳು. ಆಗ ದೀಪಸ್ತಂಭದ ಮುಂದಿನ
ಸ್ಥಳದಲ್ಲಿ ಬೆಳಕು ಪ್ರಕಾಶಿಸುವುದು” ಎಂದು ಹೇಳಿದನು.
3ಅಂತೆಯೇ ಆರೋನನು ಮಾಡಿದನು. ಆರೋನನು
ದೀಪಗಳನ್ನು ಸರಿಯಾದ ಸ್ಥಳದಲ್ಲಿಟ್ಟು ಅವುಗಳು ದೀಪ
ಸ್ತಂಭದ ಎದುರಿನಲ್ಲಿ ಪ್ರಕಾಶಿಸುವಂತೆ ಮಾಡಿದನು. ಹೀಗೆ
ಯೆಹೋವನು ಹೇಳಿದಂತೆಯೇ ಮೋಶೆಯು
ಮಾಡಿದನು.
4ಆ ದೀಪಸ್ತಂಭವನ್ನು ಅದರ ಬುಡದಿಂದ ಪುಷ್ಪಾ
ಲಂಕಾರಗಳವರೆಗೂ ಸಂಪೂರ್ಣವಾಗಿ ಚಿನ್ನದ ತಗಡಿ
ನಿಂದ ಮಾಡಲಾಗಿತ್ತು. ಯೆಹೋವನು ಮೋಶೆಗೆ
ತೋರಿಸಿದ ಮಾದರಿಯಂತೆ ಅದು ಮಾಡಲ್ಪಟ್ಟಿತ್ತು.

### ಲೇವಿಯರ ಶುದ್ಧೀಕರಣ

5ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
6“ಇಸ್ರೇಲರಿಂದ ಲೇವಿಯರನ್ನು ಪ್ರತ್ಯೇಕಿಸಿ ಶುದ್ಧೀ
ಕರಿಸು. 7ಅವರನ್ನು ಶುದ್ಧೀಕರಿಸುವ ಕ್ರಮ ಹೇಗೆಂದರೆ,
“ನೀನು ಅವರ ಮೇಲೆ ಶುದ್ಧೀಕರಣದ ನೀರನ್ನು ಚಿಮಿ
ಕಿಸಬೇಕು. ಬಳಿಕ ಅವರು ಸರ್ವಾಂಗ ಕ್ಷೌರ ಮಾಡಿಸಿ
ಕೊಳ್ಳಬೇಕು; ತಮ್ಮ ಬಟ್ಟೆಗಳನ್ನು ತೊಳೆದುಕೊಳ್ಳಬೇಕು;
ತಮ್ಮನ್ನು ಶುದ್ಧಪಡಿಸಿಕೊಳ್ಳಬೇಕು.
8“ತರುವಾಯ ಲೇವಿಯರು ಸರ್ವಾಂಗ ಹೋಮಕ್ಕಾಗಿ
ಒಂದು ಎಳೆಹೋರಿಯನ್ನು ಮತ್ತು ಅದರೊಡನೆ ಸಮ
ರ್ಪಿಸಬೇಕಾದ ಧಾನ್ಯ ಸಮರ್ಪಣೆಗಾಗಿ ಎಣ್ಣೆ ಬೆರೆಸಿದ
ಗೋಧಿಯ ಹಿಟ್ಟನ್ನು ತೆಗೆದುಕೊಂಡು ಬರ ಬೇಕು; ನೀನು
ಅವರಿಂದ ಪಾಪಪರಿಹಾರಕಯಜ್ಞಕ್ಕಾಗಿ ಮತ್ತೊಂದು
ಎಳೆಹೋರಿಯನ್ನು ತೆಗೆದುಕೊಳ್ಳಬೇಕು. 9“ಲೇವಿಯ
ರನ್ನು ದೇವದರ್ಶನಗುಡಾರದ ಮುಂಭಾಗಕ್ಕೆ ಕರೆದು
ಕೊಂಡು ಬಂದು ಇಸ್ರೇಲರನ್ನು ಒಟ್ಟಾಗಿ ಸೇರಿಸು.
10ನೀನು ಲೇವಿಯರನ್ನು ಯೆಹೋವನ ಮುಂದೆ ಕರೆದು
ಕೊಂಡು ಬಂದಾಗ ಇಸ್ರೇಲರು ತಮ್ಮ ಕೈಗಳನ್ನು ಅವರ
ತಲೆಯ ಮೇಲಿಡುವರು. 11ಆಗ ಆರೋನನು ಲೇವಿಯ
ರನ್ನು ಯೆಹೋವನಿಗೆ ಇಸ್ರೇಲರ ಕಾಣಿಕೆಯಾಗಿ ಕೊಡು
ವನು. ಈ ರೀತಿಯಾಗಿ ಲೇವಿಯರು ಯೆಹೋವನ
ಪರಿಚರ್ಯ ಕೆಲಸಕ್ಕಾಗಿ ಸಿದ್ಧರಾಗುವರು.
12“ಲೇವಿಯರು ಆ ಹೋರಿಗಳ ತಲೆಯ ಮೇಲೆ ತಮ್ಮ
ಕೈಗಳನ್ನಿಟ್ಟ ನಂತರ, ನೀನು ಯೆಹೋವನಿಗೆ ಪಾಪಪರಿ
ಹಾರಕಯಜ್ಞವಾಗಿ ಒಂದು ಹೋರಿಯನ್ನೂ ಸರ್ವಾಂಗ

ಹೋಮವಾಗಿ ಇನ್ನೊಂದು ಹೋರಿಯನ್ನೂ ಸಮರ್ಪಿಸ
ಬೇಕು. ಇವು ಲೇವಿಯರಿಗೆ ನೈವೇದ್ಯದ ಸಮರ್ಪಣೆ
ಗಳಾಗಿವೆ. 13ಈ ರೀತಿಯಲ್ಲಿ ನೀನು ಲೇವಿಯರನ್ನು
ಆರೋನ ಮತ್ತು ಅವನ ಪುತ್ರರ ಅಧೀನದಲ್ಲಿ ಸೇವೆ
ಮಾಡುವಂತೆ ಮಾಡುವೆ ಮತ್ತು ಲೇವಿಯರನ್ನು
ಯೆಹೋವನಿಗೆ ವಿಶೇಷ ಕೊಡುಗೆಯಾಗಿ ಸಲ್ಲಿಸುವೆ.
14ನೀನು ಲೇವಿಯರನ್ನು ಇತರ ಇಸ್ರೇಲರಿಂದ ಪ್ರತ್ಯೇಕಿಸ
ಬೇಕು. ಲೇವಿಯರು ನನ್ನ ಆಸ್ತಿಯಾಗಿದ್ದಾರೆ.

15"ನೀನು ಲೇವಿಯರನ್ನು ಶುದ್ಧೀಕರಿಸಿ ಅವರನ್ನು
ವಿಶೇಷ ಕೊಡುಗೆಯಾಗಿ ನನಗೆ ಕೊಟ್ಟ ಮೇಲೆ, ಅವರು
ಬಂದು ದೇವದರ್ಶನಗುಡಾರದ ಕೆಲಸವನ್ನು ಮಾಡ
ಬಹುದು. 16ಯಾಕಂದರೆ ಲೇವಿಯರು ಇಸ್ರೇಲರ ಮಧ್ಯ
ದಿಂದ ನನಗಾಗಿ ಸಂಪೂರ್ಣವಾಗಿ ಪ್ರತಿಷ್ಠಿತರಾಗಿದ್ದಾರೆ.
ಇಸ್ರೇಲರ ಚೊಚ್ಚಲು ಗಂಡುಮಕ್ಕಳಿಗೆ ಬದಲಾಗಿ ನಾನು
ಇವರನ್ನೇ ನನ್ನ ಸ್ವಂತಕ್ಕಾಗಿ ತೆಗೆದುಕೊಂಡಿದ್ದೇನೆ.
17ಇಸ್ರೇಲರಲ್ಲಿ ಚೊಚ್ಚಲಾದ ಮನುಷ್ಯರೂ ಪಶುಗಳೂ
ನನ್ನ ಸ್ವತ್ತಾಗಿರುವರು. ಈಜಿಪ್ಟ್ ದೇಶದಲ್ಲಿದ್ದ ಚೊಚ್ಚ
ಲಾದದ್ದನ್ನೆಲ್ಲ ನಾನು ಸಂಹರಿಸಿದಾಗ ಇಸ್ರೇಲರ ಚೊಚ್ಚ
ಲಾದದ್ದನ್ನು ನನ್ನ ಸ್ವಂತಕ್ಕಾಗಿ ಪ್ರತಿಷ್ಠಿಸಿಕೊಂಡೆನಲ್ಲಾ.
18ಆದರೆ ಈಗ ನಾನು ಇಸ್ರೇಲರ ಚೊಚ್ಚಲು ಗಂಡು
ಮಕ್ಕಳಿಗೆ ಬದಲಾಗಿ ಲೇವಿಯರನ್ನು ತೆಗೆದುಕೊಳ್ಳುವೆನು.
19ಇಸ್ರೇಲರ ಮಧ್ಯದಿಂದ ನಾನು ಲೇವಿಯರನ್ನು ಆರಿಸಿ
ಕೊಂಡಿದ್ದೇನೆ ಮತ್ತು ದೇವದರ್ಶನಗುಡಾರದಲ್ಲಿ
ಇಸ್ರೇಲರ ಪರವಾಗಿ ಕೆಲಸಮಾಡಲೂ ಮತ್ತು ಇಸ್ರೇಲ
ರಿಗೆ ದೋಷಪರಿಹಾರ ಮಾಡುವುದಕ್ಕೂ ನಾನು ಅವರನ್ನು
ಆರೋನ ಮತ್ತು ಅವನ ಪುತ್ರರಿಗೆ ಒಪ್ಪಿಸಿಕೊಟ್ಟಿದ್ದೇನೆ.
ಇಸ್ರೇಲರನ್ನು ಶುದ್ಧಿಗೊಳಿಸುವ ಯಜ್ಞಗಳನ್ನು ಸಮ
ರ್ಪಿಸುವುದಕ್ಕೆ ಅವರು ಸಹಾಯಮಾಡುವರು. ಹೀಗಿರು
ವುದರಿಂದ ಇಸ್ರೇಲರು ಪವಿತ್ರವಸ್ತುಗಳ ಅತೀಸಮೀಪಕ್ಕೆ
ಬಂದರೂ ಅವರಿಗೆ ಅಪಾಯವು ಸಂಭವಿಸುವುದಿಲ್ಲ."

20ಯೆಹೋವನು ಲೇವಿಯರ ವಿಷಯದಲ್ಲಿ ಆಜ್ಞಾಪಿಸಿ
ದಂತೆ ಮೋಶೆ ಆರೋನರೂ ಇಸ್ರೇಲರ ಸಮೂಹ
ದವರೆಲ್ಲರೂ ಮಾಡಿದರು. 21ಲೇವಿಯರು ತಮ್ಮನ್ನು
ಶುದ್ಧಮಾಡಿಕೊಂಡು ಬಟ್ಟೆಗಳನ್ನು ಒಗೆದುಕೊಂಡರು.
ಬಳಿಕ ಆರೋನನು ಅವರನ್ನು ಯೆಹೋವನಿಗೆ ವಿಶೇಷ
ಕೊಡುಗೆಯಾಗಿ ಕೊಟ್ಟನು. ಆರೋನನು ಅವರನ್ನು
ಶುದ್ಧೀಕರಿಸುವುದಕ್ಕಾಗಿ ಪ್ರಾಯಶ್ಚಿತ್ತ ಮಾಡಿದನು.
22ಆಗ ಲೇವಿಯರು ದೇವದರ್ಶನಗುಡಾರದಲ್ಲಿ
ಆರೋನನ ಮತ್ತು ಅವನ ಪುತ್ರರ ಮೇಲ್ವಿಚಾರಣೆಯಲ್ಲಿ
ಕೆಲಸ ಮಾಡಲು ಅರ್ಹರಾದರು. ಯೆಹೋವನು
ಮೋಶೆಗೆ ಲೇವಿಯರ ಬಗ್ಗೆ ಆಜ್ಞಾಪಿಸಿದ್ದಂತೆಯೇ
ಅವರಿಗೆ ಮಾಡಲಾಯಿತು.

23ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
24"ಲೇವಿಯರು ಅನುಸರಿಸಬೇಕಾದ ಪದ್ಧತಿ ಏನೆಂದರೆ,
ಲೇವಿಯರಲ್ಲಿ ಇಪ್ಪತ್ತೈದು ವರ್ಷಕ್ಕಿಂತ ಹೆಚ್ಚು ವಯ
ಸ್ಸಾಗಿರುವ ಗಂಡಸರು ದೇವದರ್ಶನಗುಡಾರದ ಸೇವೆಯ
ದಳದಲ್ಲಿ ಕೆಲಸಮಾಡಲು ಯೋಗ್ಯರಾಗಿದ್ದಾರೆ. 25ಅವರ
ವಯಸ್ಸು ಐವತ್ತು ವರ್ಷವಾದ ನಂತರ ಸೇವೆಯಿಂದ
ನಿವೃತ್ತರಾಗಬೇಕು; ಪವಿತ್ರಗುಡಾರವನ್ನು ವರ್ಗಾವಣೆ
ಮಾಡುವ ಭಾರವಾದ ಕೆಲಸವನ್ನು ಅವರೆಂದಿಗೂ ಮಾಡ
ಕೂಡದು. 26ಅವರು ಕಾವಲುಗಾರರಾಗಿ ದೇವದರ್ಶನ
ಗುಡಾರದ ಬಳಿ ಇತರ ಲೇವಿಯರಿಗೆ ಸಹಾಯ ಮಾಡ
ಬಹುದೇ ಹೊರತು ಭಾರವಾದ ಕೆಲಸವನ್ನು ಮಾಡಲೇ
ಕೂಡದು. ನೀನು ಈ ರೀತಿಯಲ್ಲಿ ಲೇವಿಯರಿಗೆ
ಕೆಲಸವನ್ನು ಹಂಚಿಕೊಡಬೇಕು."

## ಪಸ್ಕಹಬ್ಬ

9 ಇಸ್ರೇಲರು ಈಜಿಪ್ಟ್ ದೇಶವನ್ನು ಬಿಟ್ಟುಬಂದ
ನಂತರದ ಎರಡನೆ ವರುಷದ ಮೊದಲನೆಯ ತಿಂಗ
ಳಲ್ಲಿ ಸೀನಾಯಿ ಮರುಭೂಮಿಯಲ್ಲಿ ಯೆಹೋವನು
ಮೋಶೆಯೊಡನೆ ಮಾತಾಡಿದನು. ಯೆಹೋವನು
ಮೋಶೆಗೆ ಹೇಳಿದ್ದೇನೆಂದರೆ: 2"ಇಸ್ರೇಲರು ನೇಮಕ
ವಾದ ಕಾಲದಲ್ಲಿ ಪಸ್ಕಹಬ್ಬವನ್ನು ಆಚರಿಸಬೇಕು. 3ಅವರು
ಈ ತಿಂಗಳ ಹದಿನಾಲ್ಕನೆಯ ದಿನದ ನಸುಸಂಜೆಯ ವೇಳೆ
ಪಸ್ಕದ ಊಟವನ್ನು ಮಾಡಬೇಕು. ಅವರು ಇದನ್ನು
ಪಸ್ಕಹಬ್ಬದ ಎಲ್ಲಾ ನಿಯಮಗಳ ಪ್ರಕಾರ ನೇಮಕವಾದ
ಕಾಲದಲ್ಲಿ ಮಾಡಬೇಕು."

4ಆದುದರಿಂದ ಮೋಶೆ ಇಸ್ರೇಲರಿಗೆ, ನೀವು ಪಸ್ಕ
ಹಬ್ಬವನ್ನು ಆಚರಿಸಬೇಕೆಂದು ಹೇಳಿದನು. 5ಜನರು
ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದ ನಸು
ಸಂಜೆಯ ವೇಳೆಯಲ್ಲಿ ಸೀನಾಯಿ ಮರುಭೂಮಿಯಲ್ಲಿ
ಇದನ್ನು ಆಚರಿಸಿದರು. ಯೆಹೋವನು ಮೋಶೆಗೆ
ಆಜ್ಞಾಪಿಸಿದಂತೆ ಪ್ರತಿಯೊಂದನ್ನೂ ಮಾಡಿದರು.

6ಆದರೆ ಕೆಲವು ಜನರು ಶವವನ್ನು ಮುಟ್ಟಿದ್ದರಿಂದ
ಅಶುದ್ಧರಾಗಿ ಆ ದಿನದಲ್ಲಿ ಪಸ್ಕಹಬ್ಬವನ್ನು ಆಚರಿಸ
ಲಾಗಲಿಲ್ಲ. ಆದುದರಿಂದ ಅವರು ಆ ದಿನ ಮೋಶೆ
ಆರೋನರ ಬಳಿಗೆ ಬಂದು, 7"ನಾವು ಮನುಷ್ಯಶವವನ್ನು
ಮುಟ್ಟಿದ್ದರಿಂದ ಅಶುದ್ಧರಾಗಿದ್ದೇವೆ. ಆದರೆ ನೇಮಕ
ವಾದ ಕಾಲದಲ್ಲಿ ಯೆಹೋವನ ಪಸ್ಕಹಬ್ಬದ ಯಜ್ಞವನ್ನು
ಇತರ ಇಸ್ರೇಲರೊಡನೆ ಅರ್ಪಿಸುವುದಕ್ಕೆ ಸಾಧ್ಯ
ವಿಲ್ಲವೇ?" ಎಂದು ಕೇಳಿದರು.

8ಮೋಶೆಯು ಅವರಿಗೆ, "ಇಲ್ಲೇ ಇರಿ. ಇದರ ವಿಷಯ
ದಲ್ಲಿ ಯೆಹೋವನು ಏನು ಹೇಳುತ್ತಾನೆಂದು ನಾನು
ಆತನನ್ನು ವಿಚಾರಿಸುತ್ತೇನೆ" ಎಂದು ಹೇಳಿದನು.

9ಆಗ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
10“ನೀನು ಇಸ್ರೇಲರಿಗೆ ಹೀಗೆ ಆಜ್ಞಾಪಿಸು, ‘ನಿಮ್ಮಲ್ಲಿ
ಯಾಗಲೀ ನಿಮ್ಮ ಸಂತತಿಯವರಲ್ಲಿಯಾಗಲೀ ಶವ
ಸೋಂಕಿದ್ದರಿಂದ ಅಶುದ್ಧರಾದವರೂ ದೂರಪ್ರಯಾಣ
ದಲ್ಲಿರುವವರೂ ಸಹ ಯೆಹೋವನ ಪಸ್ಕಹಬ್ಬವನ್ನು
ಆಚರಿಸಲೇಬೇಕು. 11ಅಂಥವರು ಎರಡನೆಯ ತಿಂಗಳಿನ
ಹದಿನಾಲ್ಕನೆಯ ದಿನದ ನಸುಸಂಜೆ ವೇಳೆಯಲ್ಲಿ ಪಸ್ಕ
ಹಬ್ಬವನ್ನು ಆಚರಿಸಬೇಕು. ಆ ಸಮಯದಲ್ಲಿ ಅವರು
ಪಸ್ಕದ ಕುರಿಮರಿಯ ಮಾಂಸವನ್ನು ಹುಳಿಯಿಲ್ಲದ ರೊಟ್ಟಿ
ಗಳೊಡನೆ ಮತ್ತು ಕಹಿಯಾದ ಸೊಪ್ಪುಗಳೊಡನೆ ಊಟ
ಮಾಡಬೇಕು. 12ಅದರಲ್ಲಿ ಯಾವುದನ್ನೂ ಮರುದಿನದ
ವರೆಗೆ ಇಡಬಾರದು. ಅವರು ಅದೆಲ್ಲವನ್ನು ತಿಂದು
ಬಿಡಬೇಕು. ಆ ಕುರಿಮರಿಯ ಎಲುಬುಗಳನ್ನು ಮುರಿಯ
ಬಾರದು. ಅಂತೂ ಪಸ್ಕಹಬ್ಬದ ವಿಷಯವಾಗಿ ನೇಮಕ
ವಾಗಿರುವ ನಿಯಮಗಳ ಪ್ರಕಾರವೇ ಅದನ್ನು ಆಚರಿಸ
ಬೇಕು. 13ಆದರೆ ಯಾವನಾದರೂ ಶುದ್ಧನಾಗಿದ್ದರೂ
ಪ್ರಯಾಣದಲ್ಲಿಲ್ಲದಿದ್ದರೂ ಪಸ್ಕಹಬ್ಬವನ್ನು ಆಚರಿಸ
ದಿದ್ದರೆ, ಅವನನ್ನು ಅವನ ಜನರಿಂದ ಬಹಿಷ್ಕರಿಸಬೇಕು.
ಅವನು ಯೆಹೋವನಿಂದ ನೇಮಕವಾದ ಯಜ್ಞವನ್ನು
ಸರಿಯಾದ ಕಾಲದಲ್ಲಿ ಸಮರ್ಪಿಸದೆ ಹೋದದ್ದರಿಂದ
ಅವನು ದೋಷಿಯಾಗಿದ್ದಾನೆ ಮತ್ತು ಅವನಿಗೆ ಶಿಕ್ಷೆ
ಯಾಗಬೇಕು.
14“ನಿಮ್ಮಲ್ಲಿ ವಾಸವಾಗಿರುವ ಅನ್ಯದೇಶಸ್ಥನು
ಯೆಹೋವನಿಗೆ ಪಸ್ಕಹಬ್ಬವನ್ನು ಆಚರಿಸಬೇಕೆಂದು
ಅಪೇಕ್ಷಿಸಿದರೆ, ಅದರ ವಿಷಯವಾದ ನಿಯಮಗಳ
ಪ್ರಕಾರವೇ ಅದನ್ನು ಆಚರಿಸಬೇಕು. ಪರದೇಶದವನಿಗೂ
ಸ್ವದೇಶದವನಿಗೂ ಒಂದೇ ವಿಧಿಯಿರಬೇಕು.’’

## ಮೇಘಸ್ತಂಭ ಮತ್ತು ಅಗ್ನಿಸ್ತಂಭ

15ಇಸ್ರೇಲರು ಒಡಂಬಡಿಕೆಯ ಗುಡಾರವಾದ ಪವಿತ್ರ
ಗುಡಾರವನ್ನು ಎತ್ತಿ ನಿಲ್ಲಿಸಿದ ದಿನದಲ್ಲಿ ಮೇಘವು ಅದರ
ಮೇಲೆ ಮುಚ್ಚಿಕೊಂಡಿತು ಮತ್ತು ಅದು ರಾತ್ರಿಯಲ್ಲಿ
ಬೆಂಕಿಯಂತೆ ಕಾಣಿಸುತ್ತಿತ್ತು. 16ಹೀಗೆ ಮೇಘವು ಯಾವಾ
ಗಲೂ ದೇವದರ್ಶನಗುಡಾರವನ್ನು ಮುಚ್ಚಿಕೊಂಡಿರು
ವುದು. ರಾತ್ರಿವೇಳೆಯಲ್ಲಿ ಆ ಮೇಘವು ಬೆಂಕಿಯಂತೆ
ಕಾಣಿಸುವುದು. 17ಆ ಮೇಘವು ಪವಿತ್ರಗುಡಾರದಿಂದ
ಮೇಲಕ್ಕೆ ಎದ್ದಾಗಲೆಲ್ಲಾ ಇಸ್ರೇಲರು ಮುಂದಕ್ಕೆ
ಪ್ರಯಾಣಮಾಡುವರು. ಆ ಮೇಘವು ನಿಂತಲ್ಲೆಲ್ಲಾ
ಇಸ್ರೇಲರು ಪಾಳೆಯ ಮಾಡಿಕೊಳ್ಳುವರು. 18ಇಸ್ರೇಲರು
ಯೆಹೋವನ ಸೂಚನೆಯನ್ನು ಹೊಂದಿದ ಮೇಲೆ
ಪ್ರಯಾಣಮಾಡುವರು. ಆ ಮೋಡವು ಪವಿತ್ರಗುಡಾರದ
ಮೇಲಿರುವ ತನಕ ಅವರು ತಾವಿರುವಲ್ಲಿಯೇ ಇರುವರು.
19ಕೆಲವು ಬಾರಿ ಆ ಮೇಘವು ಬಹುದಿನಗಳವರೆಗೂ
ಪವಿತ್ರಗುಡಾರದ ಮೇಲೆ ಇರುವ ಸಂದರ್ಭದಲ್ಲಿ
ಇಸ್ರೇಲರು ಯೆಹೋವನಿಗೆ ವಿಧೇಯರಾಗಿ ಮುಂದಕ್ಕೆ
ಪ್ರಯಾಣಮಾಡಲಿಲ್ಲ.
20ಒಂದೊಂದು ವೇಳೆಯಲ್ಲಿ ಮೇಘವು ಕೆಲವು ದಿವಸ
ಮಾತ್ರ ಪವಿತ್ರಗುಡಾರದ ಮೇಲೆ ನಿಂತಿರುವುದು.
ಯೆಹೋವನ ಆಜ್ಞೆಯ ಪ್ರಕಾರ ಅವರು ಇಳಿದು
ಕೊಳ್ಳುತ್ತಿದ್ದರು ಮತ್ತು ಯೆಹೋವನ ಆಜ್ಞೆಯ ಪ್ರಕಾರ
ಹೊರಡುತ್ತಿದ್ದರು. 21ಕೆಲವು ಸಮಯಗಳಲ್ಲಿ ಮೇಘವು
ಸಾಯಂಕಾಲದಿಂದ ಹೊತ್ತಾರೆಯವರೆಗೂ ಇರುತ್ತಿತ್ತು;
ಬೆಳಿಗ್ಗೆ ಅದು ಮೇಲಕ್ಕೆ ಎದ್ದಾಗ ಜನರು ಪ್ರಯಾಣ
ಮಾಡುತ್ತಿದ್ದರು. ಮೋಡವು ಚಲಿಸಿದಾಗ ಅದು ಹಗಲಾ
ಗಿರಲೀ ರಾತ್ರಿಯಾಗಿರಲೀ ಜನರು ಅದನ್ನು ಹಿಂಬಾಲಿಸು
ವರು. 22ಆ ಮೇಘವು ಪವಿತ್ರಗುಡಾರದ ಮೇಲೆ ಎರಡು
ದಿನವಾಗಲೀ ಒಂದು ತಿಂಗಳಾಗಲೀ ಒಂದು ವರ್ಷ
ವಾಗಲೀ ನಿಂತರೆ ಅದು ನಿಂತಿರುವ ತನಕ ಇಸ್ರೇಲರು
ಪ್ರಯಾಣ ಮಾಡದೆ ಇಳಿದುಕೊಂಡೇ ಇರುವರು. ಅದು
ಮೇಲಕ್ಕೆ ಎದ್ದಾಗ ಅವರು ಹೊರಡುವರು. 23ಹೀಗೆ
ಯೆಹೋವನ ಸೂಚನೆಯಂತೆ ಜನರು ಪಾಳೆಯ ಮಾಡಿ
ಕೊಳ್ಳುವರು; ಪ್ರಯಾಣ ಮುಂದುವರಿಸುವರು.
ಮೋಶೆಯ ಮೂಲಕವಾಗಿ ಆಜ್ಞಾಪಿಸಿದಂತೆ ಜನರು
ಯೆಹೋವನ ಸೂಚನೆಗಳನ್ನು ಲಕ್ಷ್ಯವಿಟ್ಟು ಅನುಸರಿಸಿ
ನಡೆಯುತ್ತಿದ್ದರು.

## ಬೆಳ್ಳಿಯ ತುತ್ತೂರಿಗಳು

10 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2“ನೀನು ಬೆಳ್ಳಿಯ ತಗಡುಗಳಿಂದ ಎರಡು
ತುತ್ತೂರಿಗಳನ್ನು ಮಾಡಿಸಬೇಕು. ಜನಸಮೂಹದವ
ರನ್ನು ಒಟ್ಟಾಗಿ ಕರೆಸುವುದಕ್ಕೂ ಅವರು ಯಾವಾಗ
ಹೊರಡಬೇಕೆಂದು ಹೇಳುವುದಕ್ಕೂ ಇವುಗಳನ್ನು ಉಪ
ಯೋಗಿಸಬೇಕು. 3ನೀನು ಎರಡು ತುತ್ತೂರಿಗಳನ್ನು
ದೀರ್ಘಸ್ವರದಿಂದ ಊದಿಸುವಾಗ ಜನಸಮೂಹದವ
ರೆಲ್ಲರೂ ನಿನ್ನ ಹತ್ತಿರ ದೇವದರ್ಶನಗುಡಾರದ ಪ್ರವೇಶ
ದ್ವಾರದ ಬಳಿಯಲ್ಲಿ ಕೂಡಿರಬೇಕು. 4ಆದರೆ ನೀನು
ಒಂದು ತುತ್ತೂರಿಯನ್ನು ಮಾತ್ರ ಊದಿಸಿದರೆ ಇಸ್ರೇಲಿನ
ಕುಲಪ್ರಧಾನರಾದ ಮುಖ್ಯಸ್ಥರು ಮಾತ್ರ ನಿನ್ನನ್ನು
ಸಂಧಿಸಲು ಬರಬೇಕು.
5“ಜನರ ಕುಲಗಳು ಪಾಳೆಯದಿಂದ ಪ್ರಯಾಣ
ಹೊರಡಬೇಕೆಂಬುದಕ್ಕೆ ಸೂಚನೆಯಾಗಿ ತುತ್ತೂರಿಯನ್ನು
ಲಘುಸ್ವರದಿಂದ ಊದಿಸಬೇಕು. ನೀವು ಮೊದಲನೆ ಸಲ
ತುತ್ತೂರಿಯನ್ನು ಲಘುಸ್ವರದಿಂದ ಊದಿಸುವಾಗ ದೇವ
ದರ್ಶನಗುಡಾರದ ಪೂರ್ವದಿಕ್ಕಿನಲ್ಲಿ ಪಾಳೆಯ

ಹಾಕಿಕೊಂಡಿರುವ ಕುಲಗಳು ಹೊರಡಬೇಕು. 6ನೀವು
ಎರಡನೆಯ ಸಲ ತುತ್ತೂರಿಗಳನ್ನು ಲಘುಸ್ವರದಲ್ಲಿ
ಊದಿಸುವಾಗ ದೇವದರ್ಶನಗುಡಾರದ ದಕ್ಷಿಣದಿಕ್ಕಿನಲ್ಲಿ
ಪಾಳೆಯ ಹಾಕಿಕೊಂಡಿರುವ ಕುಲಗಳು ಹೊರಡಬೇಕು.
7ಆದರೆ ಜನಸಮುದಾಯವು ಕೂಡಿಬರಬೇಕಾದಾಗ
ತುತ್ತೂರಿಗಳನ್ನು ದೀರ್ಘಸ್ವರದಲ್ಲಿ ಊದಿಸಬೇಕೇ
ಹೊರತು ಲಘುಸ್ವರದಲ್ಲಲ್ಲ. 8ಯಾಜಕರಾದ ಆರೋ
ನನ ಪುತ್ರರು ಮಾತ್ರವೇ ತುತ್ತೂರಿಗಳನ್ನು ಊದಬೇಕು.
ಇದು ನಿಮಗೂ ನಿಮ್ಮ ಸಂತತಿಯವರಿಗೂ ಶಾಶ್ವತ
ನಿಯಮ.

9"ನೀವು ಸ್ವದೇಶವನ್ನು ಸೇರಿದ ಮೇಲೆ ನಿಮ್ಮ ಶತ್ರು
ಗಳನ್ನು ಎದುರಿಸುವುದಕ್ಕಾಗಿ ಯುದ್ಧಕ್ಕೆ ಹೊರಡುವಾಗ
ತುತ್ತೂರಿಗಳನ್ನು ಲಘುಸ್ವರದಲ್ಲಿ ಊದಿಸಬೇಕು. ಆಗ
ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಜ್ಞಾಪಕ
ಮಾಡಿಕೊಂಡು ಶತ್ರುಗಳಿಂದ ನಿಮ್ಮನ್ನು ರಕ್ಷಿಸುವನು.
10ಇದಲ್ಲದೆ, ನೀವು ಉತ್ಸವಕಾಲಗಳಲ್ಲಿಯೂ ಹಬ್ಬ
ಗಳಲ್ಲಿಯೂ ಅಮಾವಾಸ್ಯೆಯಲ್ಲಿಯೂ ಸರ್ವಾಂಗ
ಹೋಮಗಳನ್ನೂ ಸಮಾಧಾನ ಯಜ್ಞಗಳನ್ನೂ ಸಮ
ರ್ಪಿಸುವಾಗ ತುತ್ತೂರಿಗಳನ್ನು ಊದಿಸಬೇಕು. ನಿಮ್ಮನ್ನು
ಗಮನಿಸಬೇಕೆಂದು ಆ ತುತ್ತೂರಿ ಧ್ವನಿಗಳು ನಿಮ್ಮ
ದೇವರಿಗೆ ನೆನಪನ್ನುಂಟುಮಾಡುತ್ತವೆ. ನೀವು ಇದನ್ನು
ಮಾಡಬೇಕೆಂದು ನಾನು ಆಜ್ಞಾಪಿಸುತ್ತೇನೆ. ನಿಮ್ಮ ದೇವ
ರಾದ ಯೆಹೋವನು ನಾನೇ."

### ಇಸ್ರೇಲರ ಪ್ರಯಾಣ

11ಇಸ್ರೇಲರು ಈಜಿಪ್ಟನ್ನು ಬಿಟ್ಟ ನಂತರದ ಎರಡನೆಯ
ವರ್ಷದ ಎರಡನೆಯ ತಿಂಗಳಿನ ಇಪ್ಪತ್ತನೆಯ ದಿನದಲ್ಲಿ
ಮೇಘವು ಒಡಂಬಡಿಕೆಯ ಗುಡಾರದಿಂದ ಮೇಲೆ
ಎದ್ದಿತು. 12ಆದ್ದರಿಂದ, ಇಸ್ರೇಲರು ತಮ್ಮ ಪ್ರಯಾಣ
ಗಳನ್ನು ಪ್ರಾರಂಭಿಸಿದರು. ಅವರು ಸೀನಾಯಿ ಮರು
ಭೂಮಿಯನ್ನು ಬಿಟ್ಟು ಮೇಘವು ಪಾರಾನ್ ಮರು
ಭೂಮಿಯಲ್ಲಿ ನಿಲ್ಲುವವರೆಗೆ ಪ್ರಯಾಣ ಮಾಡಿದರು.
13ಯೆಹೋವನು ಮೋಶೆಯ ಮೂಲಕ ಕೊಟ್ಟ
ಸೂಚನೆಯ ಪ್ರಕಾರ ಅವರು ಮೊಟ್ಟಮೊದಲನೆಯ ಸಲ
ಪ್ರಯಾಣವನ್ನು ಆರಂಭಿಸಿದರು. 14ಮೊದಲು ಯೆಹೂದ
ಪಾಳೆಯದ ಮೂರು ದಂಡುಗಳು ಹೊರಟವು. ಅವರು
ತಮ್ಮ ಧ್ವಜದೊಂದಿಗೆ ಪ್ರಯಾಣ ಮಾಡಿದರು.
ಅಮ್ಮೀನಾದಾಬನ ಮಗನಾದ ನಹಶೋನನು ಯೆಹೂದ
ಕುಲದ ಸೇನಾಧಿಪತಿಯಾಗಿದ್ದನು. 15ಚೂವಾರನ ಮಗ
ನಾದ ನೆತನೇಲನು ಇಸ್ಸಾಕಾರನ ಕುಲದ ಸೇನಾಧಿಪತಿ.
16ಹೇಲೋನನ ಮಗನಾದ ಎಲೀಯಾಬನು
ಜೆಬುಲೂನ್ ಕುಲದ ಸೇನಾಧಿಪತಿ.

17ಬಳಿಕ ಪವಿತ್ರಗುಡಾರವನ್ನು ಕೆಳಗಿಳಿಸಲಾಯಿತು.
ಗೇರ್ಷೋನ್ ಮತ್ತು ಮೆರಾರೀ ಕುಲಗಳ ಗಂಡಸರು
ಪವಿತ್ರಗುಡಾರವನ್ನು ಹೊತ್ತುಕೊಂಡು ಅವರ ಹಿಂದೆ
ಹೊರಟರು. 18ಅವರ ತರುವಾಯ ರೂಬೇನ್ ಕುಲ
ದಿಂದ ಮುನ್ನಡೆಸಲ್ಪಟ್ಟ ಮೂರು ಗುಂಪುಗಳು
ಹೊರಟವು. ಅವರು ತಮ್ಮ ಧ್ವಜದೊಂದಿಗೆ ಹೊರಟರು.
ಶೆದೇಯೂರನ ಮಗನಾದ ಎಲೀಚೂರನು ರೂಬೇನ್
ಕುಲದ ಸೇನಾಧಿಪತಿಯಾಗಿದ್ದನು. 19ಚೂರೀಷದ್ದೈನ
ಮಗನಾದ ಶೆಲುಮೀಯೇಲನು ಸಿಮೆಯೋನ್ ಕುಲದ
ಸೇನಾಧಿಪತಿ. 20ದೆಗೂವೇಲನ ಮಗನಾದ ಎಲ್ಯಾಸಾಫನು
ಗಾದ್ ಕುಲದ ಸೇನಾಧಿಪತಿ. 21ಬಳಿಕ ಕೆಹಾತನ ಕುಲ
ದವರು ಹೊರಟರು. ಅವರು ದೇವಸ್ಥಾನದ ಪವಿತ್ರ
ವಸ್ತುಗಳನ್ನು ಹೊತ್ತುಕೊಂಡಿದ್ದರು. ಕೆಹಾತ್ಯರು ಪವಿತ್ರ
ವಸ್ತುಗಳೊಡನೆ ಬರುವಷ್ಟರೊಳಗೆ ಇತರ ಲೇವಿಯರು
ದೇವದರ್ಶನಗುಡಾರವನ್ನು ಎತ್ತಿ ನಿಲ್ಲಿಸುವರು. 22ಬಳಿಕ
ಎಫ್ರಾಯೀಮ್ ಪಾಳೆಯದಿಂದ ಮೂರು ಗುಂಪುಗಳು
ಹೊರಟವು. ಅವರು ತಮ್ಮ ಧ್ವಜದೊಂದಿಗೆ ಪ್ರಯಾಣ
ಮಾಡಿದರು. ಅಮ್ಮೀಹೂದನ ಮಗನಾದ
ಎಲೀಷಾಮನು ಎಫ್ರಾಯೀಮ್ ಕುಲದ ಸೇನಾಧಿಪತಿ.
23ಪೆದಾಚೂರನ ಮಗನಾದ ಗಮ್ಲೀಯೇಲನು ಮನಸ್ಸೆ
ಕುಲದ ಸೇನಾಧಿಪತಿ. 24ಗಿದ್ಯೋನಿಯ ಮಗನಾದ
ಅಬೀದಾನನು ಬೆನ್ಯಾಮೀನನ ಕುಲದ ಸೇನಾಧಿಪತಿ.

25ಆಮೇಲೆ ಎಲ್ಲಾ ಕುಲಗಳ ಹಿಂಭಾಗದಲ್ಲಿ ದಾನ್
ಕುಲದಿಂದ ಮುನ್ನಡೆಸಲ್ಪಟ್ಟ ಗುಂಪುಗಳು ಹೊರಟವು.
ಅವರು ತಮ್ಮ ಧ್ವಜದೊಂದಿಗೆ ಪ್ರಯಾಣ ಮಾಡಿದರು.
ಅಮ್ಮೀಷದ್ದೈನ ಮಗನಾದ ಅಹೀಗೆಜೆರನು ದಾನ್
ಕುಲದ ಸೇನಾಧಿಪತಿ. 26ಆಶೇರನ ಕುಲಕ್ಕೆ ಒಕ್ರಾನನ
ಮಗನಾದ ಪಗೀಯೇಲನು ಸೇನಾಧಿಪತಿಯಾಗಿದ್ದನು.
27ನಫ್ತಾಲಿ ಕುಲಕ್ಕೆ ಏನಾನ ಮಗನಾದ ಅಹೀರನು
ಸೇನಾಧಿಪತಿಯಾಗಿದ್ದನು. 28ಈ ರೀತಿಯಾಗಿ ಇಸ್ರೇಲರು
ತಮ್ಮ ಗುಂಪುಗಳಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ
ಪ್ರಯಾಣ ಮಾಡಿದರು.

29ಹೋಬಾಬನು ಮಿದ್ಯಾನ್ಯನಾದ ರೆಗೂವೇಲನ
ಮಗನು. (ರೆಗೂವೇಲನು ಮೋಶೆಯ ಮಾವ.)
ಮೋಶೆಯು ಹೋಬಾಬನಿಗೆ, "ದೇವರು ನಮಗೆ ಕೊಡು
ತ್ತೇನೆಂದು ವಾಗ್ದಾನ ಮಾಡಿದ ದೇಶಕ್ಕೆ ನಾವು ಪ್ರಯಾಣ
ಮಾಡುತ್ತಿದ್ದೇವೆ. ನಮ್ಮೊಂದಿಗೆ ಬಾ. ನಾವು ನಿನ್ನೊಂದಿಗೆ
ಉದಾರವಾಗಿರುತ್ತೇವೆ; ಯಾಕಂದರೆ ಯೆಹೋವನು
ಇಸ್ರೇಲರಿಗೆ ಒಳ್ಳೆಯವುಗಳನ್ನು ವಾಗ್ದಾನ ಮಾಡಿದ್ದಾನೆ."

30ಆದರೆ ಹೋಬಾಬನು, "ಇಲ್ಲ. ನಾನು ನಿಮ್ಮೊಂದಿಗೆ
ಬರುವುದಿಲ್ಲ. ನಾನು ನನ್ನ ಸ್ವದೇಶಕ್ಕೂ ನನ್ನ ಸ್ವಜನರ
ಬಳಿಗೂ ಹೋಗುವೆನು" ಎಂದು ಉತ್ತರಕೊಟ್ಟನು.

31ಆಗ ಮೋಶೆ, ‘‘ದಯಮಾಡಿ ನಮ್ಮನ್ನು ಬಿಟ್ಟು
ಹೋಗಬೇಡ. ನಾವು ಮರುಭೂಮಿಯಲ್ಲಿ ಎಲ್ಲಿ
ಪಾಳೆಯ ಮಾಡಿಕೊಳ್ಳಬಹುದೆಂಬುದು ನಿನಗೆ ಗೊತ್ತಿದೆ.
ನೀನು ನಮ್ಮ ಮಾರ್ಗದರ್ಶಕನಾಗಿರಬಹುದು. 32ನೀನು
ನಮ್ಮೊಂದಿಗೆ ಬಂದರೆ, ಯೆಹೋವನು ನಮಗೆ ಕೊಡುವ
ಎಲ್ಲಾ ಒಳ್ಳೆಯ ವಸ್ತುಗಳಲ್ಲಿ ನಿನಗೆ ಪಾಲು ಕೊಡುವೆವು’’
ಎಂದು ಹೇಳಿದನು.

33ಅವರು ಯೆಹೋವನ ಬೆಟ್ಟದಿಂದ ಹೊರಟು
ಮೂರು ದಿನ ಪ್ರಯಾಣಮಾಡಿದರು. ಲೇವಿಯರು
ಹೊತ್ತುಕೊಂಡಿದ್ದ ಯೆಹೋವನ ಒಡಂಬಡಿಕೆ
ಪೆಟ್ಟಿಗೆಯು ಮತ್ತೆ ಪಾಳೆಯ ಹಾಕಲು ಯೋಗ್ಯವಾದ
ಸ್ಥಳವನ್ನು ಎದುರುನೋಡುತ್ತಾ ಜನರ ಮುಂದೆ ಮೂರು
ದಿನಗಳವರೆಗೆ ಹೋಯಿತು. 34ಅವರು ಪಾಳೆಯದೊಡನೆ
ಹೊರಟಾಗ ಪ್ರತಿದಿನವೂ ಯೆಹೋವನ ಮೋಡವು
ಅವರ ಮೇಲಿರುತ್ತಿತ್ತು.

35ಜನರು ಪವಿತ್ರ ಪೆಟ್ಟಿಗೆಯನ್ನು ಎತ್ತಿಕೊಂಡು
ಹೊರಡುವಾಗ, ಮೋಶೆಯು,

‘‘ಯೆಹೋವನೇ, ಎದ್ದೇಳು! ನಿನ್ನ ವೈರಿಗಳು
ಚದರಿಹೋಗಲಿ, ನಿನ್ನ ಶತ್ರುಗಳು ಬೆನ್ನು ಕೊಟ್ಟು
ಓಡಿಹೋಗಲಿ’’ ಎಂದು ಹೇಳುತ್ತಿದ್ದನು.

36ಪವಿತ್ರಪೆಟ್ಟಿಗೆಯು ಕೆಳಗಿಳಿಸಲ್ಪಟ್ಟಾಗ ಮೋಶೆಯು,

‘‘ಯೆಹೋವನೇ, ಇಸ್ರೇಲರ ಲಕ್ಷಾಂತರ
ಕುಟುಂಬಗಳ ಬಳಿಗೆ ಹಿಂತಿರುಗಿ ಬಾ’’ ಎಂದು
ಹೇಳುತ್ತಿದ್ದನು.

## ಜನರು ಮತ್ತೆ ಗುಣಗುಟ್ಟಿದರು

11 ಜನರು ತಮಗೆ ತೊಂದರೆ ಉಂಟಾಯಿತೆಂದು
ಗಟ್ಟಿಯಾಗಿ ಗುಣಗುಟ್ಟಿದರು. ಅದನ್ನು
ಯೆಹೋವನು ಕೇಳಿ ಕೋಪಗೊಂಡನು. ಯೆಹೋವ
ನಿಂದ ಬಂದ ಬೆಂಕಿ ಅವರ ವಿರುದ್ಧವಾಗಿ ಹೊತ್ತಿಕೊಂಡದ್ದ
ರಿಂದ ಪಾಳೆಯದ ಹೊರಭಾಗದಲ್ಲಿದ್ದವರು ನಾಶ
ವಾದರು. 2ಆಗ ಜನರು ಸಹಾಯಕ್ಕಾಗಿ ಮೋಶೆಗೆ ಮೊರೆ
ಯಿಟ್ಟರು. ಮೋಶೆಯು ಯೆಹೋವನಿಗೆ ಪ್ರಾರ್ಥಿಸಲಾಗಿ
ಬೆಂಕಿ ಆರಿಹೋಯಿತು. 3ಯೆಹೋವನು ಅವರಿಗೆ
ವಿರುದ್ಧವಾಗಿ ಬೆಂಕಿ ಉರಿಯುವಂತೆ ಮಾಡಿದ್ದರಿಂದ
ಜನರು ಆ ಸ್ಥಳಕ್ಕೆ ‘‘ತಬೇರ’’* ಎಂದು ಹೆಸರಿಟ್ಟರು.

## ಎಪ್ಪತ್ತು ಮಂದಿ ಹಿರಿಯರು

4ಅವರ ಮಧ್ಯದಲ್ಲಿದ್ದ ಕಿರುಕುಳಕೊಡುವ ಪರ
ದೇಶಸ್ಥರು ಬೇರೆ ರೀತಿಯ ಆಹಾರಕ್ಕಾಗಿ ಬಹಳವಾಗಿ
ಆಶಿಸಿದರು. ಇಸ್ರೇಲರು ಸಹ ಮತ್ತೆ ಅಳಲು ಆರಂಭಿಸಿ,
‘‘ನಮಗೆ ಯಾರು ಮಾಂಸವನ್ನು ಕೊಡುತ್ತಾರೆ. 5ನಾವು
ಈಜಿಪ್ಟಿನಲ್ಲಿ ಬಿಟ್ಟಿಯಾಗಿ ತಿನ್ನುತ್ತಿದ್ದ ಮೀನು, ಸವತೆ
ಕಾಯಿ, ಕರ್ಬೂಜು, ಈರುಳ್ಳಿಸೊಪ್ಪು, ಈರುಳ್ಳಿ, ಬೆಳ್ಳುಳ್ಳಿ
ಇವುಗಳನ್ನು ನಾವು ಜ್ಞಾಪಿಸಿಕೊಳ್ಳುತ್ತೇವೆ. 6ಆದರೆ ನಾವು
ಈಗ ನಮ್ಮ ಬಲವನ್ನು ಕಳೆದುಕೊಂಡಿದ್ದೇವೆ. ಈ
ಮನ್ನವನ್ನು ಬಿಟ್ಟು ನಮ್ಮಲ್ಲಿ ತಿನ್ನಲು ಬೇರೇನೂ ಇಲ್ಲ’’
ಎಂದರು. 7ಈ ಮನ್ನವು ಕೊತ್ತುಂಬರಿ ಕಾಳಿನಂತಿತ್ತು,
ಮತ್ತು ಬದೋಲಖಧೂಪದಂತೆ ಕಾಣಿಸಿತು. 8ಜನರು
ಮನ್ನವನ್ನು ಕೂಡಿಸಿಕೊಂಡು ಬೀಸುವ ಕಲ್ಲುಗಳಿಂದ
ಬೀಸಿ ಅಥವಾ ಒರಳಲ್ಲಿ ಕುಟ್ಟಿ, ಮಡಕೆಗಳಲ್ಲಿ ಬೇಯಿಸಿ
ತೆಳುವಾದ ರೊಟ್ಟಿಗಳನ್ನು ಮಾಡಿಕೊಂಡರು. ಅದರ ರುಚಿ
ಆಲಿವ್ ಎಣ್ಣೆಯಿಂದ ಮಾಡಿದ ಭಕ್ಷ್ಯಗಳಂತಿತ್ತು. 9ರಾತ್ರಿ
ಕಾಲದಲ್ಲಿ ಮಂಜು ಪಾಳೆಯದಲ್ಲಿ ಬೀಳುತ್ತಿದ್ದಾಗ
ಅದರೊಂದಿಗೆ ಮನ್ನವೂ ಬೀಳುತ್ತಿತ್ತು.

10ಎಲ್ಲಾ ಕುಟುಂಬದವರೂ ತಮ್ಮತಮ್ಮ ಗುಡಾರದ
ಬಾಗಿಲುಗಳಲ್ಲಿ ನಿಂತು ಗುಣಗುಟ್ಟುತ್ತಿರುವ ಶಬ್ದವು
ಮೋಶೆಗೆ ಕೇಳಿಸಿತು. ಆಗ ಯೆಹೋವನು ಬಹು ಕೋಪ
ಗೊಂಡನು. ಇದರಿಂದಾಗಿ ಮೋಶೆಗ ಬಹಳ ಬೇಸರ
ವಾಯಿತು. 11ಆಗ ಮೋಶೆ ಯೆಹೋವನಿಗೆ, ‘‘ನಿನ್ನ ಸೇವಕ
ನಾದ ನನಗೆ ಯಾಕೆ ತೊಂದರೆಯನ್ನು ಉಂಟುಮಾಡಿದೆ.
ನಾನು ನಿನಗೆ ಬೇಸರವನ್ನು ಉಂಟುಮಾಡಿದೆನೇ? ಈ
ಜನರೆಲ್ಲರನ್ನು ಮುನ್ನಡೆಸಿಕೊಂಡು ಹೋಗುವ ಭಾರ
ವನ್ನು ನೀನು ನನ್ನ ಮೇಲೆ ಯಾಕೆ ಹಾಕಿದೆ? 12ನಾನು
ಇವರಿಗೆ ಹೆತ್ತ ತಾಯಿಯೋ? ನಾನು ಅವರಿಗೆ ಜನ್ಮ
ಕೊಡಲಿಲ್ಲವೆಂದು ನಿನಗೆ ಗೊತ್ತಿದೆ. ದಾದಿಯು ಮಗು
ವನ್ನು ಎತ್ತಿಕೊಂಡು ಹೋಗುವಂತೆ, ಈ ಜನರನ್ನು ನಾನು
ನನ್ನ ಮಡಿಲಲ್ಲಿ ಇಟ್ಟು, ನೀನು ಅವರ ಪೂರ್ವಿಕರಿಗೆ
ವಾಗ್ದಾನಮಾಡಿರುವ ದೇಶಕ್ಕೆ ಎತ್ತಿಕೊಂಡು ಹೋಗು
ವಂತೆ ನೀನು ನನಗೇಕೆ ಹೇಳುವೇ? 13ಇವರು ನನ್ನ ಬಳಿಗೆ
ಬಂದು, ‘‘ಮಾಂಸವನ್ನು ನಮಗೆ ತಿನ್ನಲಿಕ್ಕೆ ಕೊಡು’ ಎಂದು
ಕೇಳಿಕೊಳ್ಳುತ್ತಾರಲ್ಲಾ? ಇಷ್ಟು ಜನಕ್ಕೆ ಬೇಕಾದ
ಮಾಂಸವು ನನಗೆ ಎಲ್ಲಿಂದ ದೊರಕೀತು? 14ಇಷ್ಟು ಜನರ
ಭಾರವನ್ನು ನಾನೊಬ್ಬನೇ ಹೊರುವುದು ನನಗೆ ಅಸಾಧ್ಯ.
ಅದು ನನ್ನ ಶಕ್ತಿಗೆ ಮೀರಿದ ಕೆಲಸ. 15ನೀನು ಹೀಗೆಯೇ
ನನಗೆ ಮಾಡುವುದಾಗಿದ್ದರೆ ಅದಕ್ಕೆ ಬದಲಾಗಿ ನನ್ನನ್ನು
ಕೊಂದುಬಿಡು ಎಂದು ಬೇಡಿಕೊಳ್ಳುತ್ತೇನೆ. ಆಗ ನಾನು
ಈ ದುರವಸ್ಥೆಗಳಿಂದ ವಿಮುಕ್ತನಾಗುವೆನು’’ ಎಂದು
ಹೇಳಿದನು.

---

**ತಬೇರ** ಅಂದರೆ ‘‘ಉರಿಯುವಿಕೆ.’’

[16]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
''ಇಸ್ರೇಲರಲ್ಲಿ ಹಿರಿಯರೆಂದೂ ಅಧಿಕಾರಿಗಳೆಂದೂ
ನೀನು ತಿಳಿದುಕೊಂಡಿರುವ ಎಪ್ಪತ್ತು ಮಂದಿಯನ್ನು
ಕೂಡಿಸಿ ದೇವದರ್ಶನಗುಡಾರದ ಬಾಗಿಲಿಗೆ ಕರೆದು
ತಂದು ಅಲ್ಲೇ ನಿನ್ನೊಡನೆ ನಿಲ್ಲಿಸಿಕೊ. [17]ನಾನು ಅಲ್ಲಿಗೆ
ಇಳಿದುಬಂದು ನಿನ್ನ ಸಂಗಡ ಮಾತಾಡುವೆನು. ಅದಲ್ಲದೆ
ನಾನು ನಿನಗೆ ಅನುಗ್ರಹಿಸಿದ ಆತ್ಮವನ್ನೇ ಅವರ ಮೇಲೆ
ಸುರಿಸುವೆನು. ಆಗ ಸ್ವತಃ ನೀನೇ ಈ ಜನರ ಭಾರವನ್ನು
ವಹಿಸಬೇಕಾಗಿರುವುದಿಲ್ಲ. ಈ ಎಪ್ಪತ್ತು ಮಂದಿ
ಹಿರಿಯರು ಆ ಭಾರವನ್ನು ಹೊರಲು ನಿನಗೆ ಸಹಾಯ
ಮಾಡುವರು.

[18]''ಇಸ್ರೇಲರಿಗೆ ಹೀಗೆ ಹೇಳು: ನಾಳೆಗಾಗಿ ನಿಮ್ಮನ್ನು
ಪವಿತ್ರರನ್ನಾಗಿ ಮಾಡಿಕೊಳ್ಳಿರಿ. ನಾಳೆ ನೀವು ಮಾಂಸವನ್ನು
ತಿನ್ನುವಿರಿ. 'ನಮಗೆ ಮಾಂಸವನ್ನು ಕೊಡುವವರು
ಯಾರು? ನಾವು ಈಜಿಪ್ಟಿನಲ್ಲಿ ಇದಕ್ಕಿಂತಲೂ ಚೆನ್ನಾಗಿ
ದ್ದೆವಲ್ಲಾ' ಎಂಬ ನಿಮ್ಮ ದೂರನ್ನು ಯೆಹೋವನು ಕೇಳಿ
ದ್ದಾನೆ. ಆದ್ದರಿಂದ ಯೆಹೋವನು ನಿಮಗೆ ಮಾಂಸವನ್ನು
ಕೊಡುವನು ಮತ್ತು ನೀವು ತಿನ್ನುವಿರಿ. [19]ನೀವು ಒಂದು
ದಿನವಲ್ಲ, ಎರಡು ದಿನವಲ್ಲ, ಐದು ದಿನವಲ್ಲ, ಹತ್ತು
ದಿನವಲ್ಲ, ಇಪ್ಪತ್ತು ದಿನವಲ್ಲ, [20]ಒಂದು ತಿಂಗಳು ಪೂರ್ತಿ
ಮಾಂಸವನ್ನು ತಿನ್ನುವಿರಿ. ಅದು ನಿಮ್ಮ ಮೂಗಿನಲ್ಲಿ ಹೊರ
ಬರುವ ತನಕ ಮತ್ತು ನಿಮಗೆ ಅಸಹ್ಯವಾಗುವವರೆಗೆ
ಅದನ್ನು ತಿನ್ನುವಿರಿ. ನೀವು ನಿಮ್ಮ ಮಧ್ಯದಲ್ಲಿರುವ
ಯೆಹೋವನನ್ನು ತಿರಸ್ಕರಿಸಿದ್ದರಿಂದ ಮತ್ತು 'ನಾವೇಕೆ
ಈಜಿಪ್ಟನ್ನು ಬಿಟ್ಟುಬಂದೆವು' ಎಂದು ಆತನ ಮುಂದೆ
ದೂರುಹೇಳಿದ್ದರಿಂದ ಇದು ನಿಮಗೆ ಸಂಭವಿಸುವುದು.''

[21]ಮೋಶೆ ''ಯೆಹೋವನೇ, ಇಲ್ಲಿ ಆರು ಲಕ್ಷ ಗಂಡ
ಸರು ನನ್ನೊಂದಿಗೆ ಇದ್ದಾರೆ. ಆದಾಗ್ಯೂ ನೀನು ಇವರಿಗೆ
ಮಾಂಸ ಕೊಡುವುದಾಗಿಯೂ ಇವರು ಒಂದು ತಿಂಗ
ಳೆಲ್ಲಾ ಅದನ್ನು ತಿನ್ನುವುದಾಗಿಯೂ ನೀನು ಹೇಳುತ್ತಿರುವೆ.
[22]ನಾವು ಎಲ್ಲಾ ಕುರಿಗಳನ್ನು ದನಕರುಗಳನ್ನು ಕೊಂದರೂ
ಇಷ್ಟು ಜನರು ಒಂದು ತಿಂಗಳು ತಿನ್ನುವುದಕ್ಕೆ ಸಾಕಾಗದು.
ಸಮುದ್ರದಲ್ಲಿರುವ ಮೀನುಗಳೆಲ್ಲವನ್ನು ಹಿಡಿದರೂ
ಅದು ಇಷ್ಟು ಜನರಿಗೆ ಸಾಕಾಗದು'' ಎಂದು ಹೇಳಿದನು.

[23]ಆದರೆ ಯೆಹೋವನು ಮೋಶೆಗೆ, ''ಯೆಹೋವನ
ಶಕ್ತಿಗೆ ಮಿತಿಯಿಲ್ಲ. ನಾನು ಹೇಳುತ್ತಿರುವ ಸಂಗತಿಗಳು
ನಡೆಯುವುದನ್ನು ನೀನು ನೋಡುವೆ'' ಎಂದು
ಹೇಳಿದನು.

[24]ಮೋಶೆಯು ಹೊರಟುಹೋಗಿ, ಯೆಹೋವನು
ಹೇಳಿದ್ದನ್ನು ಜನರಿಗೆ ತಿಳಿಸಿ, ಇಸ್ರೇಲರ ಹಿರಿಯರಲ್ಲಿ
ಎಪ್ಪತ್ತು ಮಂದಿಯನ್ನು ಒಟ್ಟಾಗಿ ಸೇರಿಸಿದನು. ಅವರು
ಗುಡಾರದ ಸುತ್ತಲೂ ನಿಲ್ಲುವಂತೆ ಆಜ್ಞಾಪಿಸಿದನು. [25]ಆಗ
ಯೆಹೋವನು ಮೇಘದಲ್ಲಿ ಇಳಿದು ಮೋಶೆಯೊಡನೆ
ಮಾತಾಡಿ ಮೋಶೆಯಲ್ಲಿದ್ದ ಆತ್ಮವನ್ನೇ* ಆ ಎಪ್ಪತ್ತು
ಮಂದಿ ಹಿರಿಯರಿಗೆ ಕೊಟ್ಟನು. ಆತ್ಮಿಕ ವರಗಳು ಅವರಿಗೆ
ಕೊಡಲ್ಪಟ್ಟಾಗ ಅವರು ಪ್ರವಾದಿಗಳಂತೆ ಪ್ರವಾದಿಸಿದರು.
ಆದರೆ ಮತ್ತೆ ಅವರು ಹಾಗೆ ಪ್ರವಾದಿಸಲಿಲ್ಲ.

[26]ಎಲ್ದಾದ್ ಮತ್ತು ಮೇದಾದ್ ಎಂಬ ಹಿರಿಯರಿಬ್ಬರು
ಗುಡಾರದ ಬಳಿಗೆ ಹೋಗಲಿಲ್ಲ. ಹಿರಿಯರ ಹೆಸರುಗಳಿದ್ದ
ಪಟ್ಟಿಯಲ್ಲಿ ಅವರ ಹೆಸರುಗಳಿದ್ದುವು. ಆದರೆ ಅವರು
ಗುಡಾರದಲ್ಲೇ ಉಳಿದುಕೊಂಡರು. ಆದರೆ ಅವರಿಗೆ
ಆತ್ಮಿಕ ವರಗಳು ಕೊಡಲ್ಪಟ್ಟಿದ್ದರಿಂದ ಅವರು ಪಾಳೆಯ
ದಲ್ಲಿ ಪ್ರವಾದಿಗಳಂತೆ ಪ್ರವಾದಿಸತೊಡಗಿದರು. [27]ಒಬ್ಬ
ಯೌವನಸ್ಥನು ಮೋಶೆಯ ಬಳಿಗೆ ಓಡಿಹೋಗಿ,
''ಎಲ್ದಾದ್ ಮತ್ತು ಮೇದಾದ್ ಎಂಬಿಬ್ಬರು ಪಾಳೆಯ
ದಲ್ಲಿ ಪ್ರವಾದಿಗಳಂತೆ ಪ್ರವಾದಿಸುತ್ತಿದ್ದಾರೆ'' ಎಂದು
ಹೇಳಿದನು. [28]ನೂನನ ಮಗನಾದ ಯೆಹೋಶುವನು
ಮೋಶೆಗೆ, ''ಸ್ವಾಮೀ, ನೀನು ಅವರನ್ನು ತಡೆಯಬೇಕು''
ಎಂದನು. (ಯೆಹೋಶುವನು ಯೌವನಸ್ಥನಾಗಿದ್ದಾಗಿ
ನಿಂದಲೂ ಮೋಶೆಯ ಸಹಾಯಕನಾಗಿದ್ದನು.) [29]ಆದರೆ
ಮೋಶೆಯು, ''ನೀನು ನನಗೋಸ್ಕರ ಭಾವೋದ್ವೇಗ
ಗೊಂಡಿರುವೆಯೋ? ಯೆಹೋವನ ಜನರೆಲ್ಲರೂ
ಪ್ರವಾದಿಗಳಾಗಿರಬೇಕೆಂದು ನಾನು ಬಯಸುತ್ತೇನೆ. ಅವ
ರೆಲ್ಲರ ಮೇಲೆ ಯೆಹೋವನು ತನ್ನ ಆತ್ಮನನ್ನು ಇರಿಸ
ಬೇಕೆಂದು ನಾನು ಬಯಸುತ್ತೇನೆ'' ಎಂದುತ್ತರಿಸಿದನು.
[30]ಬಳಿಕ ಮೋಶೆಯು ಮತ್ತು ಇಸ್ರೇಲರ ನಾಯಕರು
ಪಾಳೆಯಕ್ಕೆ ಹಿಂತಿರುಗಿದರು.

### ಲಾವಕ್ಕಿಗಳು

[31]ಆಗ ಯೆಹೋವನು ಸಮುದ್ರದ ಕಡೆಯಿಂದ ಬಲ
ವಾದ ಗಾಳಿಯು ಬೀಸುವಂತೆ ಮಾಡಿದನು. ಗಾಳಿಯು
ಲಾವಕ್ಕಿಗಳನ್ನು ಹೊತ್ತುಕೊಂಡು ಬಂತು. ಲಾವಕ್ಕಿಗಳು
ಪಾಳೆಯದ ಸುತ್ತಲೂ ಹಾರಿಬಂದವು. ಒಬ್ಬನು ಪ್ರತಿ
ಯೊಂದು ದಿಕ್ಕಿನಲ್ಲಿ ಒಂದು ದಿನ ನಡೆಯಬಹುದಾದಷ್ಟು
ದೂರದವರೆಗೂ ಲಾವಕ್ಕಿಗಳು ಭೂಮಿಯಿಂದ ಮೂರು
ಅಡಿ ಎತ್ತರದಲ್ಲಿ ಹಾರಾಡುತ್ತಿದ್ದವು. [32]ಜನರು ಎದ್ದು ಆ
ದಿನವೆಲ್ಲಾ ಮತ್ತು ರಾತ್ರಿಯೆಲ್ಲಾ ಮತ್ತು ಮರುದಿನವೆಲ್ಲಾ
ಲಾವಕ್ಕಿಗಳನ್ನು ಕೂಡಿಸಿಕೊಂಡರು. ಸ್ವಲ್ಪ ಕೂಡಿಸಿ
ಕೊಂಡವನು ಅರವತ್ತು ಕಿಲೋ ಗ್ರಾಂ ಕೂಡಿಸಿ
ಕೊಂಡನು. ಬಳಿಕ ಜನರು ಲಾವಕ್ಕಿಗಳ ಮಾಂಸವನ್ನು
ಪಾಳೆಯದ ಸುತ್ತಲೂ ಹರಡಿ ಬಿಸಿಲಿನಲ್ಲಿ ಒಣಗಿಸಿ
ಕೊಂಡರು. [33]ಜನರು ಮಾಂಸವನ್ನು ಇನ್ನೂ

---

**ಆತ್ಮವನ್ನೇ** ಅಕ್ಷರಶಃ, ದೇವರು ಮೋಶೆಯಲ್ಲಿದ್ದ ಆತ್ಮವನ್ನು ತೆಗೆದು ಕೊಂಡು ಅವರ ಮೇಲೆ ಸುರಿಸಿದನು.

ತಿನ್ನುತ್ತಿರುವಾಗಲೇ ಮತ್ತು ಲಾವಕ್ಕಿಗಳ ಸರಬರಾಜು ನಿಂತು ಹೋಗುವುದಕ್ಕಿಂತ ಮೊದಲೇ ಯೆಹೋವನು ಬಹಳವಾಗಿ ಕೋಪಗೊಂಡು ಜನರ ಮಧ್ಯದಲ್ಲಿ ಭಯಂಕರವಾದ ಕಾಯಿಲೆಯನ್ನು ಉಂಟುಮಾಡಿದನು. ಜನರಲ್ಲಿ ಅನೇಕರು ಸತ್ತದ್ದರಿಂದ ಅವರನ್ನು ಅಲ್ಲೇ ಹೂಳಿಟ್ಟರು. 34ಈ ಕಾರಣದಿಂದ ಆ ಸ್ಥಳಕ್ಕೆ 'ಕಿಬ್ರೋತ್ ಹತಾವಾ' ಎಂದು ಹೆಸರಿಟ್ಟರು. ಮಾಂಸಕ್ಕಾಗಿ ಅತ್ಯಾಶೆ ಪಟ್ಟವರನ್ನು ಅಲ್ಲಿ ಹೂಳಿಟ್ಟದ್ದರಿಂದ ಆ ಸ್ಥಳಕ್ಕೆ ಈ ಹೆಸರನ್ನು ಇಟ್ಟರು. 35ಜನರು ಕಿಬ್ರೋತ್ ಹತಾವಾದಿಂದ ಪ್ರಯಾಣಮಾಡಿ ಹಚೇರೋತಿಗೆ ಹೋಗಿ ಅಲ್ಲಿ ಇಳಿದುಕೊಂಡರು.

## ಮಿರ್ಯಾಮಳು ಮತ್ತು ಆರೋನನು ಮೋಶೆಗೆ ವಿರುದ್ಧವಾಗಿ ಗುಣಗುಟ್ಟಿದ್ದು

12 ಮೋಶೆಯು ಇಥಿಯೋಪ್ಯದ ಸ್ತ್ರೀಯನ್ನು ಮದುವೆ ಮಾಡಿಕೊಂಡ ಕಾರಣ ಮಿರ್ಯಾಮಳೂ ಆರೋನನೂ ಮೋಶೆಗೆ ವಿರೋಧವಾಗಿ ಮಾತಾಡಿದರು. 2ಅವರು, ''ಯೆಹೋವನು ಮೋಶೆಯೊಡನೆ ಮಾತ್ರ ಮಾತಾಡಿದ್ದಾನೊ? ಆತನು ನಮ್ಮೊಡನೆಯೂ ಮಾತಾಡಿದನಲ್ಲವೇ?'' ಅಂದರು.

ಯೆಹೋವನು ಅವರ ಮಾತುಗಳನ್ನು ಕೇಳಿದನು. 3(ಮೋಶೆಯು ಬಹಳ ದೀನನಾದ ವ್ಯಕ್ತಿ. ಅವನು ಭೂಮಿಯ ಮೇಲಿರುವ ಎಲ್ಲಾ ಮನುಷ್ಯರಿಗಿಂತಲೂ ದೀನನಾಗಿದ್ದನು.) 4ಆದ್ದರಿಂದ ಕೂಡಲೇ ಯೆಹೋವನು ಮೋಶೆ, ಆರೋನರ ಮತ್ತು ಮಿರ್ಯಾಮಳ ಸಂಗಡ ಮಾತಾಡಿ, ''ನೀವು ಮೂವರು ದೇವದರ್ಶನ ಗುಡಾರಕ್ಕೆ ಬನ್ನಿ'' ಎಂದು ಹೇಳಿದನು.

ಆದ್ದರಿಂದ ಮೋಶೆ, ಆರೋನರು ಮತ್ತು ಮಿರ್ಯಾಮಳು ದೇವದರ್ಶನಗುಡಾರಕ್ಕೆ ಹೋದರು. 5ಯೆಹೋವನು ಎತ್ತರವಾದ ಮೇಘದಲ್ಲಿ ಇಳಿದುಬಂದು ದೇವದರ್ಶನ ಗುಡಾರದ ಪ್ರವೇಶದ್ವಾರದ ಬಳಿ ನಿಂತನು. ಯೆಹೋವನು ಆರೋನನನ್ನೂ ಮಿರ್ಯಾಮಳನ್ನೂ ಕರೆದನು. ಆರೋನನೂ ಮಿರ್ಯಾಮಳೂ ಹತ್ತಿರಕ್ಕೆ ಹೋದರು. 6ದೇವರು, ''ನನ್ನ ಮಾತನ್ನು ಕೇಳಿರಿ. ನಿಮ್ಮಲ್ಲಿ ಪ್ರವಾದಿಯಿದ್ದರೆ, ನಾನು ಅವನಿಗೆ ನನ್ನನ್ನು ದರ್ಶನದಲ್ಲಿ ಗೊತ್ತುಪಡಿಸಿಕೊಳ್ಳುವೆನು ಅಥವಾ ಸ್ವಪ್ನದಲ್ಲಿ ಅವನ ಸಂಗಡ ಮಾತಾಡುವೆನು. 7ಆದರೆ ಮೋಶೆಯೊಡನೆ ನಾನು ಆ ರೀತಿ ಮಾಡುವುದಿಲ್ಲ. ಮೋಶೆಯು ನನ್ನ ನಂಬಿಗಸ್ತನಾದ ಸೇವಕನು. ಅವನ ಮೇಲೆ ನನಗೆ ಭರವಸೆಯಿದೆ. 8ನಾನು ಅವನೊಂದಿಗೆ ಗೂಡಾರ್ಥದಿಂದ ಮಾತಾಡದೆ ನೇರವಾಗಿಯೂ ಸ್ಪಷ್ಟವಾಗಿಯೂ ಮಾತಾಡುತ್ತೇನೆ. ಅವನು ನನ್ನ ಸ್ವರೂಪವನ್ನೇ ನೋಡಬಲ್ಲನು. ನನ್ನ ಸೇವಕನಾದ ಮೋಶೆಗೆ ವಿರೋಧವಾಗಿ ಮಾತಾಡಲು ನೀವು ಯಾಕೆ ಭಯಪಡಲಿಲ್ಲ?'' ಎಂದು ಹೇಳಿದನು.

9ಯೆಹೋವನು ಅವರ ಮೇಲೆ ಬಹಳವಾಗಿ ಕೋಪಗೊಂಡು ಹೊರಟುಹೋದನು. 10ಮೇಘವು ಗುಡಾರದಿಂದ ಮೇಲಕ್ಕೆ ಎದ್ದಿತು. ಆರೋನನು ಹಿಂತಿರುಗಿ ಮಿರ್ಯಾಮಳನ್ನು ನೋಡಿದನು. ಆಕೆಯ ಚರ್ಮವು ಹಿಮದಂತೆ ಬೆಳ್ಳಗಾಗಿತ್ತು. ಆಕೆಗೆ ಭಯಂಕರವಾದ ಚರ್ಮರೋಗ ಹಿಡಿದಿತ್ತು.

11ಆಗ ಆರೋನನು ಮೋಶೆಗೆ, ''ಸ್ವಾಮೀ, ನಾವು ಮೂರ್ಖತನದಿಂದ ಮಾಡಿದ ಪಾಪಕ್ಕೆ ದಯವಿಟ್ಟು ನಮ್ಮನ್ನು ದಂಡಿಸಬೇಡ. 12ಗರ್ಭದಲ್ಲೇ ಅರ್ಧ ಮಾಂಸ ಕೊಳೆತುಹೋಗಿ, ಹುಟ್ಟುವಾಗಲೇ ಸತ್ತ ಮಗುವಿನಂತೆ ಈಕೆಗೆ ಆಗದಂತೆ ದಯವಿಟ್ಟು ಕಾಪಾಡು'' ಎಂದು ಬೇಡಿಕೊಂಡನು. 13ಆದ್ದರಿಂದ ಮೋಶೆ ಯೆಹೋವನಿಗೆ ಪ್ರಾರ್ಥಿಸಿ, ''ದೇವರೇ, ದಯಮಾಡಿ ಈಕೆಯನ್ನು ವಾಸಿಮಾಡು'' ಎಂದು ಹೇಳಿದನು.

14ಅದಕ್ಕೆ ಯೆಹೋವನು, ''ತಂದೆ ಮುಖದ ಮೇಲೆ ಉಗುಳಿದ್ದರೆ ಆಕೆ ಏಳು ದಿವಸ ನಾಚಿಕೆಯಿಂದ ಇರುತ್ತಿರಲಿಲ್ಲವೇ? ಹಾಗಾದರೆ ಆಕೆ ಏಳು ದಿವಸ ಪಾಳೆಯದ ಹೊರಗೆ ಇರಬೇಕು. ತರುವಾಯ ಆಕೆ ಪಾಳೆಯದೊಳಗೆ ಬರಬಹುದು'' ಎಂದು ಉತ್ತರಿಸಿದನು.

15ಆದಕಾರಣ ಅವರು ಮಿರ್ಯಾಮಳನ್ನು ಏಳು ದಿವಸಗಳವರೆಗೆ ಪಾಳೆಯದ ಹೊರಗೆ ಇಟ್ಟರು. ಆಕೆ ತಿರುಗಿ ಸೇರಿಕೊಳ್ಳುವ ಪರ್ಯಂತರ ಇಸ್ರೇಲರು ಪ್ರಯಾಣ ಮಾಡಲಿಲ್ಲ. 16ಇದಾದ ನಂತರ, ಜನರು ಹಚೇರೋತಿನಿಂದ ಹೊರಟು ಪಾರಾನ್ ಮರುಭೂಮಿಯಲ್ಲಿ ಪಾಳೆಯ ಮಾಡಿಕೊಂಡರು.

## ಗೂಢಚಾರರು ಕಾನಾನ್ ದೇಶಕ್ಕೆ ಹೋದದ್ದು

13 ಯೆಹೋವನು ಮೋಶೆಗೆ, 2''ಕಾನಾನ್ ದೇಶದ ಬಗ್ಗೆ ವಿಷಯವನ್ನು ಸಂಗ್ರಹಿಸಿಕೊಂಡು ಬರಲು ಗೂಢಚಾರರನ್ನು ಕಳುಹಿಸು. ನಾನು ಇಸ್ರೇಲರಿಗೆ ಕೊಡುವ ದೇಶ ಇದಾಗಿದೆ. ಹನ್ನೆರಡು ಕುಲಗಳಿಂದ ಒಬ್ಬೊಬ್ಬ ನಾಯಕನನ್ನು ಕಳುಹಿಸು'' ಎಂದು ಹೇಳಿದನು.

3ಜನರು ಪಾರಾನ್ ಮರುಭೂಮಿಯಲ್ಲಿ ಇಳಿದುಕೊಂಡಿದ್ದಾಗ ಯೆಹೋವನ ಆಜ್ಞೆಗನುಸಾರವಾಗಿ ಮೋಶೆಯು ಈ ನಾಯಕರನ್ನು ಕಳುಹಿಸಿದನು. 4ಆ ನಾಯಕರು ಯಾರೆಂದರೆ:

ರೂಬೇನ್ ಕುಲದಿಂದ ಜಕ್ಕೂರನ ಮಗನಾದ
ಶಮ್ಮೂವ,
5 ಸಿಮೆಯೋನ್ ಕುಲದಿಂದ ಹೋರಿಯ
ಮಗನಾದ ಶಾಫಾಟ್,

6 ಯೆಹೂದ ಕುಲದಿಂದ ಯೆಫುನ್ನೆಯ ಮಗನಾದ ಕಾಲೇಬ್,

7 ಇಸ್ಸಾಕಾರನ ಕುಲದಿಂದ ಯೋಸೇಫನ ಮಗನಾದ ಇಗಾಲ್,

8 ಎಫ್ರಾಯೀಮ್ ಕುಲದಿಂದ ನೂನನ ಮಗನಾದ ಹೋಶೇಯ,

9 ಬೆನ್ಯಾಮೀನ್ ಕುಲದಿಂದ ರಾಫೂವನ ಮಗನಾದ ಪಲ್ಟೀ,

10 ಜೆಬುಲೂನ್ ಕುಲದಿಂದ ಸೋದೀಯ ಮಗನಾದ ಗದ್ದೀಯೇಲ್,

11 ಯೋಸೇಫನ ಕುಲದಿಂದ (ಮನಸ್ಸೆ) ಸೂಸೀಯ ಮಗನಾದ ಗದ್ದೀ.

12 ದಾನ್ ಕುಲದಿಂದ ಗೆಮಲ್ಲೀಯ ಮಗನಾದ ಅಮ್ಮೀಯೇಲ್.

13 ಆಶೇರ್ ಕುಲದಿಂದ ಮೀಕಾಯೇಲನ ಮಗನಾದ ಸೆತೂರ್,

14 ನಫ್ತಾಲಿ ಕುಲದಿಂದ ವಾಪೆಸೀಯನ ಮಗನಾದ ನಹಬೀ,

15 ಗಾದ್ ಕುಲದಿಂದ ಮಾಕೀಯನ ಮಗನಾದ ಗೆಯೂವೇಲ್.

16 ದೇಶದ ವಿಷಯವನ್ನು ಸಂಗ್ರಹಿಸಿಕೊಂಡು ಬರಲು ಮೋಶೆ ಕಳುಹಿಸಿದ ಗೂಢಚಾರರ ಹೆಸರುಗಳು ಇವೆ.

(ಮೋಶೆಯು ನೂನನ ಮಗನಾದ ಹೋಶೇಯನಿಗೆ ಯೆಹೋಶುವನೆಂದು ಹೆಸರಿಟ್ಟನು.)

17 ಕಾನಾನ್ ದೇಶದ ವಿಷಯವನ್ನು ಸಂಗ್ರಹಿಸಿಕೊಂಡು ಬರಲು ಮೋಶೆ ಅವರನ್ನು ಕಳುಹಿಸುವಾಗ ಅವರಿಗೆ, ‘‘ನೀವು ಬೆಟ್ಟದ ಸೀಮೆಗೆ ನೆಗೆವ್ ಮೂಲಕ ಹತ್ತಿ ಹೋಗಿ
18 ಆ ದೇಶದ ಸಂಗತಿಯನ್ನೆಲ್ಲಾ ತಿಳಿದುಕೊಳ್ಳಿರಿ. ಅಲ್ಲಿಯ ನಿವಾಸಿಗಳು ಬಲಿಷ್ಠರೋ ಅಥವಾ ಬಲಹೀನರೋ, ಬಹಳ ಮಂದಿಯೋ ಅಥವಾ ಸ್ವಲ್ಪ ಮಂದಿಯೋ,
19 ಅವರ ದೇಶ ಒಳ್ಳೆಯದೋ ಅಥವಾ ಕೆಟ್ಟದ್ದೋ, ಅವರ ಪಟ್ಟಣಗಳು ಗೋಡೆಗಳನ್ನು ಹೊಂದಿವೆಯೋ ಅಥವಾ ಇಲ್ಲವೋ,
20 ಭೂಮಿಯು ಸಾರವಾದದ್ದೋ ಅಥವಾ ನಿಸ್ಸಾರವಾದದ್ದೋ, ಮರಗಳನ್ನು ಹೊಂದಿದೆಯೋ ಅಥವಾ ಇಲ್ಲವೋ, ಎಂಬುದನ್ನು ತಿಳಿದುಕೊಳ್ಳಿ. ಅದಲ್ಲದೆ ಆ ದೇಶದ ಉತ್ಪನ್ನಗಳಲ್ಲಿ ಕೆಲವನ್ನು ತರಲು ಪ್ರಯತ್ನ ಮಾಡಿ’’ ಎಂದು ಹೇಳಿದನು. (ಆಗ ದ್ರಾಕ್ಷಾಲತೆಗಳ ಪ್ರಥಮಫಲದ ಕಾಲವಾಗಿತ್ತು.)

21 ಅವರು ಬೆಟ್ಟದ ಸೀಮೆಗೆ ಹತ್ತಿಹೋಗಿ ಚಿನ್ ಅರಣ್ಯದಿಂದಿಡಿದು ಲೆಬೊಹಮಾತಿನ ಬಳಿಯಲ್ಲಿರುವ ರೆಹೋಬಿನವರೆಗೂ ದೇಶದ ವಿಷಯಗಳನ್ನು ಸಂಗ್ರಹಿಸಿ ಕೊಂಡರು.
22 ಅವರು ನೆಗೆವ್ ಮೂಲಕ ದೇಶವನ್ನು ಪ್ರವೇಶಿಸಿ ಹೆಬ್ರೋನಿಗೆ ಹೋದರು. ಹೆಬ್ರೋನ್ ಪಟ್ಟಣವು ಚೋವನ್ ಪಟ್ಟಣಕ್ಕಿಂತ ಏಳು ವರುಷಗಳ ಮುಂಚೆ ಕಟ್ಟಲ್ಪಟ್ಟಿತ್ತು. ಅಲ್ಲಿ ಅಹೀಮನ್, ಶೇಷೈ ಮತ್ತು ತಲ್ಮೈ ಎಂಬವರು ವಾಸಿಸುತ್ತಿದ್ದರು. ಇವರು ಅನಾಕನ ಸಂತತಿಯವರು.
23 ಬಳಿಕ ಅವರು ಎಷ್ಕೋಲ್* ಕಣಿವೆಗೆ ಹೋದರು. ಅಲ್ಲಿ ಅವರು ದ್ರಾಕ್ಷಾಲತೆಯಿಂದ ಒಂದು ಕೊಂಬೆಯನ್ನು ಕಡಿದರು. ಆ ಕೊಂಬೆಯಲ್ಲಿ ದ್ರಾಕ್ಷೆಯ ಗೊಂಚಲಿತ್ತು. ಅವರು ಅದನ್ನು ಒಂದು ಕೋಲಿಗೆ ಕಟ್ಟಿ ಇಬ್ಬರು ಅದನ್ನು ಹೊತ್ತುಕೊಂಡು ಬಂದರು. ಕೆಲವು ದಾಳಿಂಬೆ ಹಣ್ಣುಗಳನ್ನು ಮತ್ತು ಅಂಜೂರದ ಹಣ್ಣು ಗಳನ್ನು ಹೊತ್ತು ತಂದರು.
24 ಇಸ್ರೇಲರು ಅಲ್ಲಿ ದ್ರಾಕ್ಷೆಯ ಗೊಂಚಲನ್ನು ಕತ್ತರಿಸಿದ್ದರಿಂದ ಆ ಸ್ಥಳಕ್ಕೆ ಎಷ್ಕೋಲ್ ಕಣಿವೆ ಎಂದು ಹೆಸರಾಯಿತು.

25 ಜನರು ನಲವತ್ತು ದಿನಗಳವರೆಗೆ ದೇಶವನ್ನು ಸಂಚರಿಸಿ ನೋಡಿ, ತಮ್ಮ ಪಾಳೆಯಕ್ಕೆ ಹಿಂತಿರುಗಿದರು.
26 ಇಸ್ರೇಲರು ಪಾರಾನ್ ಮರುಭೂಮಿಯ ಕಾದೇಶಿನಲ್ಲಿ ತಂಗಿದ್ದರು. ಅವರು ನೋಡಿದ್ದರ ಬಗ್ಗೆ ಎಲ್ಲವನ್ನು ಮೋಶೆಗೂ ಆರೋನನಿಗೂ ಎಲ್ಲ ಇಸ್ರೇಲರಿಗೂ ತಿಳಿಸಿದರು. ಅವರು ಕಾನಾನ್ ದೇಶದಿಂದ ತಂದ ಹಣ್ಣುಗಳನ್ನು ತೋರಿಸಿದರು.
27 ಜನರು ಮೋಶೆಗೆ, ‘‘ನೀನು ಕಳುಹಿಸಿದ ದೇಶಕ್ಕೆ ನಾವು ಹೋಗಿ ಸಂಚರಿಸಿ ನೋಡಿದೆವು. ಅದು ಹಾಲೂ ಜೇನೂ ಹರಿಯುವ ದೇಶವಾಗಿದೆ. ಇಗೋ ಹಣ್ಣುಗಳಲ್ಲಿ ಕೆಲವು ಇಲ್ಲಿವೆ.
28 ಅಲ್ಲಿನ ಜನರು ಬಲಿಷ್ಠರು. ಪಟ್ಟಣಗಳೂ ಬಹಳ ದೊಡ್ಡದಾಗಿವೆ. ಪಟ್ಟಣಗಳು ಕೋಟೆಕೊತ್ತಲುಗಳುಳ್ಳದಾಗಿವೆ. ನಾವು ಕೆಲವು ಅನಾಕ್ಯ ರನ್ನು ಸಹ ನೋಡಿದೆವು.
29 ಅಮಾಲೇಕ್ಯರು ನೆಗೆವ್‌ನಲ್ಲಿ ವಾಸಿಸುತ್ತಾರೆ. ಹಿತ್ತಿಯರು, ಯೆಬೂಸಿಯರು ಮತ್ತು ಅಮೋರಿಯರು ಪರ್ವತಪ್ರದೇಶದಲ್ಲಿ ವಾಸಿಸುತ್ತಾರೆ. ಕಾನಾನ್ಯರು ಸಮುದ್ರ ತೀರದಲ್ಲಿಯೂ ಮತ್ತು ಯೊರ್ದನ್ ನದಿಯ ಉದ್ದಕ್ಕೂ ವಾಸಿಸುತ್ತಾರೆ’’ ಎಂದು ಹೇಳಿದರು.

30 ಕಾಲೇಬನು ಮೋಶೆಯ ಬಳಿಯಲ್ಲಿದ್ದ ಜನರನ್ನು ಸುಮ್ಮನಿರಿಸಿ, ‘‘ನಾವು ಹೋಗಿ ದೇಶವನ್ನು ವಶಪಡಿಸಿ ಕೊಳ್ಳಬೇಕು. ನಾವು ಸುಲಭವಾಗಿ ದೇಶವನ್ನು ವಶಪಡಿಸಿ ಕೊಳ್ಳಬಹುದು’’ ಎಂದು ಹೇಳಿದನು.

31 ಆದರೆ ಅವನೊಡನೆ ಹೋದ ಜನರು, ‘‘ನಾವು ಆ ಜನರೊಡನೆ ಹೋರಾಡಲಾರೆವು, ಅವರು ನಮ ಗಿಂತಲೂ ಬಲಿಷ್ಠರು’’ ಎಂದು ಹೇಳಿದರು.
32 ‘‘ನಾವು ಸಂಚರಿಸಿ ವಿಷಯ ಸಂಗ್ರಹಿಸಿಕೊಂಡು ಬಂದ ದೇಶವು ಅಲ್ಲಿ ವಾಸಿಸುವವರನ್ನು ನಾಶಪಡಿಸುವ ದೇಶವಾಗಿದೆ.

---

**ಎಷ್ಕೋಲ್** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ ‘‘ದ್ರಾಕ್ಷಿಯ ಗೊಂಚಲು.’’

ನಾವು ಅಲ್ಲಿ ನೋಡಿದ ಎಲ್ಲಾ ಜನರು ರಾಕ್ಷಸರಂತಿದ್ದಾರೆ.
33ರಾಕ್ಷಸರಾದ ನೆಫೀಲರು ಅಲ್ಲಿ ವಾಸವಾಗಿರುವುದನ್ನು
ನಾವು ನೋಡಿದೆವು. (ಅನಾಕ್ಯರು ನೆಫೀಲಿಯ ಜನರ
ಸಂತತಿಯವರಾಗಿದ್ದಾರೆ.) ಅವರ ಮುಂದೆ ನಾವು ಮಿಡತೆ
ಗಳೊ ಎಂದೆನಿಸಿತು. ಅವರಿಗೂ ಸಹ ನಾವು ಮಿಡತೆಗಳಂತೆ
ಕಂಡುಬಂದೆವು'' ಎಂದರು.

## ಜನರು ಮತ್ತೆ ಗುಣಗುಟ್ಟಿದ್ದು

14 ಆ ರಾತ್ರಿಯಲ್ಲಿ ಜನರೆಲ್ಲರೂ ಗಟ್ಟಿಯಾಗಿ
ಕೂಗಿಕೊಂಡರು. 2ಇಸ್ರೇಲರು ಮೋಶೆ
ಆರೋನರ ವಿರುದ್ಧ ಗುಣಗುಟ್ಟಿದರು. ಜನರೆಲ್ಲರೂ
ಒಟ್ಟಾಗಿ ಮೋಶೆ ಆರೋನರ ಬಳಿಗೆ ಬಂದು, ''ನಾವು
ಈಜಿಪ್ಟಿನಲ್ಲಿಯಾಗಲೀ ಅಥವಾ ಈ ಮರುಭೂಮಿ
ಯಲ್ಲಾಗಲೀ ಸತ್ತಿದ್ದರೆ ಒಳ್ಳೆಯದಿತ್ತು. 3ಯುದ್ಧದಲ್ಲಿ
ನಾವು ಸತ್ತುಹೋಗುವಂತೆ ಯೆಹೋವನು ನಮ್ಮನ್ನು ಈ
ಹೊಸ ದೇಶಕ್ಕೆ ತರುತ್ತಿರುವುದೇಕೆ? ವೈರಿಗಳು ನಮ್ಮನ್ನು
ಕೊಂದು ನಮ್ಮ ಹೆಂಡತಿಯರನ್ನೂ ಮಕ್ಕಳನ್ನೂ ತೆಗೆದು
ಕೊಳ್ಳುವರು. ನಾವು ಈಜಿಪ್ಟಿಗೆ ಮರಳಿಹೋಗುವುದೇ
ಉತ್ತಮ'' ಎಂದು ಹೇಳಿದರು.

4ಬಳಿಕ ಜನರು, ''ನಾವು ಇನ್ನೊಬ್ಬ ನಾಯಕನನ್ನು
ಆರಿಸಿಕೊಂಡು ಈಜಿಪ್ಟಿಗೆ ಮರಳಿಹೋಗೋಣ'' ಎಂದು
ಮಾತಾಡಿಕೊಂಡರು. 5ಮೋಶೆ ಆರೋನರು ಇಸ್ರೇಲರ
ಸರ್ವಸಮೂಹದವರ ಮುಂದೆ ಬೋರಲಬಿದ್ದರು.
6ನೂನನ ಮಗನಾದ ಯೆಹೋಶುವನೂ ಯೆಫುನ್ನೆಯ
ಮಗನಾದ ಕಾಲೇಬನೂ ದೇಶದ ವಿಷಯವನ್ನು ಸಂಗ್ರ
ಹಿಸಿಕೊಂಡು ಬಂದವರಲ್ಲಿ ಇಬ್ಬರಾಗಿದ್ದರು. ಅವರು
ಬೇಸರಗೊಂಡು ತಮ್ಮ ಬಟ್ಟೆಗಳನ್ನು ಹರಿದುಕೊಂಡರು.
7ಇವರಿಬ್ಬರು ಇಸ್ರೇಲರೆಲ್ಲರಿಗೆ, ''ನಾವು ಸಂಚರಿಸಿ
ನೋಡಿದ ದೇಶವು ಅತ್ಯುತ್ತಮವಾದದ್ದು, 8ಅದು ಹಾಲೂ
ಜೇನೂ ಹರಿಯುವ ದೇಶ. ಯೆಹೋವನು ನಮ್ಮನ್ನು
ಮೆಚ್ಚಿಕೊಂಡರೆ ಆ ದೇಶದೊಳಗೆ ನಮ್ಮನ್ನು ಕರೆದೊಯ್ದು
ಅದನ್ನು ನಮ್ಮ ಸ್ವಾಧೀನಕ್ಕೆ ಕೊಡುವನು. 9ಹೀಗಿರು
ವುದರಿಂದ ಯೆಹೋವನಿಗೆ ವಿರುದ್ಧವಾಗಿ ಏಳಬೇಡಿರಿ.
ಆ ದೇಶದ ಜನರಿಗೆ ಭಯ ಪಡಬೇಡಿರಿ. ನಾವು ಅವರನ್ನು
ಸೋಲಿಸಬಹುದು. ಅವರಿಗೆ ಯಾವ ಸಂರಕ್ಷಣೆ ಇರು
ವುದಿಲ್ಲ. ಆದರೆ ನಮ್ಮ ಕಡೆ ಯೆಹೋವನು ಇದ್ದಾನೆ.
ಆದ್ದರಿಂದ ಭಯಪಡಬೇಡಿರಿ'' ಅಂದರು.

10ಎಲ್ಲಾ ಜನರು ಯೆಹೋಶುವನನ್ನು ಮತ್ತು
ಕಾಲೇಬನನ್ನು ಕಲ್ಲೆಸೆದು ಕೊಲ್ಲಬೇಕೆಂದು ಮಾತಾಡ
ತೊಡಗಿದರು. ಆದರೆ ಯೆಹೋವನ ತೇಜಸ್ಸು ದೇವ
ದರ್ಶನ ಗುಡಾರದಲ್ಲಿ ಹೊಳೆದು ಇಸ್ರೇಲರೆಲ್ಲರಿಗೆ
ಕಾಣಿಸಿತು. ಯೆಹೋವನು ಮೋಶೆಯೊಡನೆ ಮತಾಡಿ,
11''ಈ ಜನರು ಇನ್ನೆಷ್ಟು ಕಾಲದವರೆಗೆ ನನ್ನನ್ನು
ತಿರಸ್ಕರಿಸುವರು? ನಾನು ನಡಿಸಿದ ಎಲ್ಲಾ ಮಹತ್ಕಾರ್ಯ
ಗಳನ್ನು ಇವರು ಪ್ರತ್ಯಕ್ಷವಾಗಿ ನೋಡಿದಾಗ್ಯೂ ಇನ್ನೆಷ್ಟು
ಕಾಲದವರೆಗೆ ನನ್ನನ್ನು ನಂಬದೆ ಇರುವರು? 12ಸರಿ,
ನಾನು ಇವರಿಗೆ ವ್ಯಾಧಿಯನ್ನು ಉಂಟುಮಾಡಿ ಇವರನ್ನು
ನಿರ್ಮೂಲಮಾಡಿ ಈ ಜನಕ್ಕಿಂತ ಹೆಚ್ಚಾಗಿಯೂ ಬಲಿಷ್ಠ
ವಾಗಿಯೂ ಇರುವ ಜನಾಂಗವನ್ನು ನಿನ್ನ ಮೂಲಕವೇ
ಹುಟ್ಟಿಸುವೆನು'' ಎಂದು ಹೇಳಿದನು.

13ಅದಕ್ಕೆ ಮೋಶೆ ಯೆಹೋವನಿಗೆ, ''ನೀನು ನಿನ್ನ
ಜನರಾದ ಇಸ್ರೇಲರನ್ನು ನಿನ್ನ ಶಕ್ತಿಯ ಮೂಲಕ ಈಜಿಪ್ಟಿ
ನಿಂದ ಕರೆದುಕೊಂಡು ಬಂದೆ. ನೀನು ನಿನ್ನ ಜನರನ್ನು
ನಾಶಮಾಡಿದರೆ, ಈಜಿಪ್ಟಿನವರು ಈ ಸುದ್ದಿಗಳನ್ನು ಕೇಳಿ
ಕಾನಾನಿನ ನಿವಾಸಿಗಳಿಗೆ ಅದರ ಬಗ್ಗೆ ತಿಳಿಸುವರು.
14ಅದಲ್ಲದೆ, ಈ ದೇಶದವರು ನೀನು ಇಸ್ರೇಲರ ಮಧ್ಯ
ದಲ್ಲಿರುವ ಸಂಗತಿಯನ್ನು ಕೇಳಿದ್ದಾರೆ. ನೀನು ಇಸ್ರೇಲರಿಗೆ
ಪ್ರತ್ಯಕ್ಷನಾಗಿ ಕಾಣಿಸಿಕೊಂಡದ್ದು ಅವರಿಗೆ ತಿಳಿದಿದೆ. ನಿನ್ನ
ಮೇಘವು ಇಸ್ರೇಲರ ಮೇಲಿರುವುದು ಅವರಿಗೆ ಗೊತ್ತಿದೆ.
ನೀನು ಇಸ್ರೇಲರನ್ನು ಹಗಲಲ್ಲಿ ಮೇಘಸ್ತಂಭದ ಮೂಲಕ
ವಾಗಿಯೂ ರಾತ್ರಿಯಲ್ಲಿ ಅಗ್ನಿಸ್ತಂಭದ ಮೂಲಕ
ವಾಗಿಯೂ ಮುನ್ನಡೆಸುತ್ತಿರುವುದು ಅವರಿಗೆ ತಿಳಿದಿದೆ.
15ಹೀಗಿರಲಾಗಿ, ನೀನು ಒಂದೇ ಪೆಟ್ಟಿನಿಂದ ಈ ಜನರನ್ನು
ಸಾಯಿಸಿದರೆ, ನಿನ್ನ ಪ್ರಖ್ಯಾತಿಯನ್ನು ಕೇಳಿದ ಜನಾಂಗ
ಗಳವರು ನಿನ್ನ ವಿಷಯದಲ್ಲಿ, 16'ಯೆಹೋವನು ಪ್ರಮಾಣ
ಪೂರ್ವಕವಾಗಿ ವಾಗ್ದಾನ ಮಾಡಿದ ದೇಶದಲ್ಲಿ ಇಸ್ರೇಲ
ರನ್ನು ಸೇರಿಸುವುದಕ್ಕೆ ಶಕ್ತಿಸಾಲದೆ ಅವರನ್ನು ಮರು
ಭೂಮಿಯಲ್ಲಿ ನಾಶಮಾಡಿದನು' ಎಂದು ಮಾತಾಡಿ
ಕೊಳ್ಳುವರು.

17''ಆದ್ದರಿಂದ ಒಡೆಯನೇ, ನೀನು ಹೇಳಿದಂತೆಯೇ
ನಿನ್ನ ತಾಳ್ಮೆಯು ದೀರ್ಘವಾಗಿರಲಿ. 18ನೀನು ನಿನ್ನ ವಿಷಯ
ದಲ್ಲಿ 'ಯೆಹೋವನು ದೀರ್ಘಶಾಂತನು, ಬಹುಪ್ರೀತಿ
ಯುಳ್ಳವನು, ಅಪರಾಧ ಪಾಪಗಳನ್ನು ಕ್ಷಮಿಸುವವ
ನಾಗಿದ್ದರೂ ಎಲ್ಲಾ ದಂಡನೆಯನ್ನು ರದ್ದುಪಡಿಸದವನು.
ತಂದೆಗಳ ಪಾಪಫಲವನ್ನು ಮಕ್ಕಳ ಮೇಲೆ ಮೂರು ನಾಲ್ಕು
ತಲೆಗಳವರೆಗೆ ಬರಮಾಡುವವನು' ಎಂದು ನೀನೇ
ಹೇಳಿರುವಿಯಲ್ಲಾ! 19ನಾವು ಈಜಿಪ್ಟಿನಿಂದ ಬಂದದ್ದು
ಮೊದಲುಗೊಂಡು ಇದುವರೆಗೆ ನೀನು ಈ ಜನರ ಪಾಪ
ಗಳನ್ನು ಕ್ಷಮಿಸಿದ ಪ್ರಕಾರವೇ ಈಗಲೂ ಮಹಾಕೃಪೆ
ಯಿಂದ ಇವರ ಪಾಪವನ್ನು ಕ್ಷಮಿಸಬೇಕೆಂದು ನಿನ್ನನ್ನು
ಬೇಡಿಕೊಳ್ಳುತ್ತೇನೆ'' ಎಂದು ಪ್ರಾರ್ಥಿಸಿದನು.

20ಅದಕ್ಕೆ ಯೆಹೋವನು, ''ನೀನು ಕೇಳಿಕೊಂಡಂತೆ
ನಾನು ಜನರನ್ನು ಕ್ಷಮಿಸುವೆನು. 21ಆದಾಗ್ಯೂ ನನ್ನ
ಜೀವದಾಣೆ ಮತ್ತು ಯೆಹೋವನ ಮಹಿಮೆಯು

ಭೂಲೋಕದಲ್ಲೆಲ್ಲಾ ತುಂಬಿರಬೇಕೆಂಬುವ ನಿಶ್ಚಯ
ವಾಕ್ಯದ ಆಣೆ, [22]ಈಜಿಪ್ಟಿನಲ್ಲಿಯೂ ಮರುಭೂಮಿ
ಯಲ್ಲಿಯೂ ನಾನು ನಡಿಸಿರುವ ಮಹಾತ್ಕಾರ್ಯಗಳನ್ನೂ
ನನ್ನ ಮಹಿಮೆಯನ್ನೂ ನೋಡಿದ ಈ ಜನರೆಲ್ಲರೂ
ಪದೇಪದೇ ನನ್ನನ್ನು ಪರೀಕ್ಷಿಸಿದ್ದರಿಂದ ಮತ್ತು ನನಗೆ
ವಿಧೇಯರಾಗದಿದ್ದ ಕಾರಣ, [23]ನಾನು ಅವರ ಪೂರ್ವಿಕ
ರಿಗೆ ಪ್ರಮಾಣ ಪೂರ್ವಕವಾಗಿ ವಾಗ್ದಾನ ಮಾಡಿದ
ದೇಶವನ್ನು ಇವರಲ್ಲಿ ಯಾರೂ ನೋಡುವುದಿಲ್ಲ. ನನ್ನನ್ನು
ತಿರಸ್ಕರಿಸಿದ ಇವರಲ್ಲಿ ಯಾರೂ ಅದನ್ನು ನೋಡು
ವುದಿಲ್ಲ. [24]ಆದರೆ ನನ್ನ ಸೇವಕನಾದ ಕಾಲೇಬನು ಅವರ
ಹಾಗಲ್ಲ, ಅವನು ನನ್ನನ್ನು ಮನಃಪೂರ್ವಕವಾಗಿ ಹಿಂಬಾ
ಲಿಸಿದ್ದಾನೆ. ಆದ್ದರಿಂದ ಅವನು ಸಂಚರಿಸಿ ನೋಡಿದ
ದೇಶಕ್ಕೆ ಅವನನ್ನು ಬರಮಾಡುವೆನು ಮತ್ತು ಅವನ ಸಂತತಿ
ಯವರು ಆ ದೇಶವನ್ನು ಹೊಂದುವರು. [25]ಅಮಾಲೇ
ಕ್ಯರೂ ಕಾನಾನ್ಯರೂ ಆ ಕಣಿವೆಯಲ್ಲಿ ವಾಸವಾಗಿದ್ದಾರೆ.
ಆದ್ದರಿಂದ ಕೆಂಪು ಸಮುದ್ರಕ್ಕೆ ಹೋಗುವ ದಾರಿಯ
ಮೂಲಕ ಅರಣ್ಯಕ್ಕೆ ಮರಳಿ ಪ್ರಯಾಣ ಮಾಡಬೇಕು''
ಎಂದು ಹೇಳಿದನು.

## ಯೆಹೋವನು ಜನರನ್ನು ಶಿಕ್ಷಿಸಿದ್ದು

[26-27]ಯೆಹೋವನು ಮೋಶೆ ಆರೋನರಿಗೆ, ``ಈ
ದುಷ್ಟ ಸಮೂಹದವರು ನನಗೆ ವಿರುದ್ಧವಾಗಿ ಇನ್ನೆಷ್ಟ
ರವರೆಗೆ ಗುಣಗುತ್ತಲೇ ಇರುತ್ತಾರೆ. ಇಸ್ರೇಲರು ನನಗೆ
ವಿರೋಧವಾಗಿ ಗುಣಗುಟ್ಟುವುದು ನನಗೆ ಕೇಳಿಸಿದೆ.
[28]ಆದ್ದರಿಂದ ನೀನು ಅವರಿಗೆ ಹೀಗೆ ಹೇಳಬೇಕು.
ಯೆಹೋವನು ಹೇಳುವುದೇನೆಂದರೆ, ``ನನ್ನ ಜೀವದಾಣೆ.
ನೀವು ಏನನ್ನು ಹೇಳಿದಿರೋ ಅದನ್ನೇ ನಿಮಗೆ ಮಾಡು
ತ್ತೇನೆ; [29]ನಿಮ್ಮ ಶವಗಳು ಈ ಮರುಭೂಮಿಯಲ್ಲಿಯೇ
ಬೀಳುವವು. ನೀವು ನನಗೆ ವಿರೋಧವಾಗಿ ಗುಣಗುಟ್ಟಿದ್ದ
ರಿಂದ ನಿಮ್ಮಲ್ಲಿ ಲೆಕ್ಕಿಸಲ್ಪಟ್ಟವರೆಲ್ಲರೂ ಅಂದರೆ ಇಪ್ಪತ್ತು
ವರುಷ ಮೊದಲುಗೊಂಡು ಹೆಚ್ಚಾದ ವಯಸ್ಸುಳ್ಳವ
ರೆಲ್ಲರೂ ಅರಣ್ಯದಲ್ಲಿಯೇ ಸಾಯುವರು. [30]ಯೆಫುನ್ನೆಯ
ಮಗನಾದ ಕಾಲೇಬ್ ಮತ್ತು ನೂನನ ಮಗನಾದ
ಯೆಹೋಶುವ ಇವರಿಬ್ಬರೇ ಹೊರತು ನಿಮ್ಮಲ್ಲಿ ಬೇರೆ
ಯಾರೂ ನಾನು ಪ್ರಮಾಣಪೂರ್ವಕವಾಗಿ ವಾಗ್ದಾನ
ಮಾಡಿದ ದೇಶವನ್ನು ಸೇರುವುದಿಲ್ಲ. [31]ಪರರ ಪಾಲಾಗು
ವರೆಂದು ನೀವು ಹೇಳಿದ ನಿಮ್ಮ ಚಿಕ್ಕಮಕ್ಕಳನ್ನು ಅಲ್ಲಿಗೆ
ಪ್ರವೇಶಿಸುವಂತೆ ಮಾಡುವೆನು. ನೀವು ತಿರಸ್ಕರಿಸಿದ
ದೇಶವನ್ನು ಅವರು ಅನುಭೋಗಿಸುವರು. [32]ನೀವಂತೂ
ಈ ಮರುಭೂಮಿಯಲ್ಲಿ ಸಾಯುವಿರಿ. ನಿಮ್ಮೆಲ್ಲರ
ಶವಗಳು ಈ ಅರಣ್ಯದಲ್ಲಿ ಪರ್ಯಂತರ ಬೀಳುವವು.

[33]``ನಿಮ್ಮ ಅಪನಂಬಿಗಸ್ತಿಕೆಯ ಫಲವನ್ನು ನಿಮ್ಮ
ಮಕ್ಕಳು ಅನುಭವಿಸುವವರಾಗಿ ನೀವು ಸಾಯುವತನಕ
ನಲವತ್ತು ವರ್ಷ ಮರುಭೂಮಿಯಲ್ಲಿ ಅಲೆದಾಡುವರು.
[34]ನೀವು ಆ ದೇಶವನ್ನು ಸಂಚರಿಸಿ ನೋಡಿದ ನಲವತ್ತು
ದಿನಗಳಿಗೆ ಸಮನಾಗಿ, ದಿನ ಒಂದಕ್ಕೆ ಒಂದು ಸಂವತ್ಸರದ
ಮೇರೆಗೆ ನಲವತ್ತು ವರುಷ ನಿಮ್ಮ ಪಾಪದ ಫಲವನ್ನು
ಅನುಭವಿಸುವಿರಿ. ನನ್ನನ್ನು ತಿರಸ್ಕರಿಸುವುದೆಂದರೆ
ಏನೆಂಬುದು ನಿಮಗೆ ಗೊತ್ತಾಗುತ್ತದೆ.

[35]``ಇದು ಯೆಹೋವನೆಂಬ ನಾನು ಹೇಳಿದ ಮಾತು.
ನನಗೆ ವಿರೋಧವಾಗಿ ಕೂಡಿಕೊಂಡಿರುವ ಈ ದುಷ್ಟ
ಸಮೂಹದವರೆಲ್ಲರಿಗೆ ಈ ಮಾತಿನ ಮೇರೆಗೆ ಖಂಡಿತ
ವಾಗಿ ಮಾಡುತ್ತೇನೆ. ಈ ಮರುಭೂಮಿಯಲ್ಲಿಯೇ ಇವ
ರೆಲ್ಲರೂ ಸಾಯಬೇಕು'' ಎಂದು ಹೇಳಿದನು.

[36-37]ಆ ದೇಶವನ್ನು ಸಂಚರಿಸಿ ನೋಡುವುದಕ್ಕೆ
ಮೋಶೆಯಿಂದ ಕಳುಹಿಸಲ್ಪಟ್ಟು ಹಿಂದಿರುಗಿಬಂದು ಆ
ದೇಶದ ವಿಷಯದಲ್ಲಿ ಅಶುಭಸಮಾಚಾರವನ್ನು ಹೇಳಿ
ಸರ್ವಸಮೂಹದವರನ್ನು ಅವರಿಗೆ ವಿರೋಧವಾಗಿ ಗುಣ
ಗುಟ್ಟುವಂತೆ ಮಾಡಿದ ಹತ್ತು ಜನರು ಯೆಹೋವನಿಂದ
ವ್ಯಾಧಿಗೊಳಗಾಗಿ ಸತ್ತರು. [38]ನೂನನ ಮಗನಾದ
ಯೆಹೋಶುವನು ಮತ್ತು ಯೆಫುನ್ನೆಯನ ಮಗನಾದ
ಕಾಲೇಬನ ಹೊರತು ಉಳಿದ ಹತ್ತು ಮಂದಿ ಸತ್ತರು.
ಯೆಹೋವನು ಅವರಿಬ್ಬರನ್ನು ಉಳಿಸಿದನು. ಅವರಿಗೆ
ವ್ಯಾಧಿಯು ತಗಲಲಿಲ್ಲ.

## ಜನರು ಕಾನಾನಿಗೆ ಹೋಗಲು ಪ್ರಯತ್ನಿಸಿದ್ದು

[39]ಮೋಶೆಯು ಈ ಎಲ್ಲಾ ಸಂಗತಿಗಳನ್ನು ಇಸ್ರೇಲ
ರಿಗೆಲ್ಲಾ ಹೇಳಲಾಗಿ ಅವರು ಬಹಳ ದುಃಖಪಟ್ಟರು.
[40]ಮರುದಿನ ಬೆಳಿಗ್ಗೆ ಜನರು ಎದ್ದು, ``ನಾವು ಪಾಪ
ಮಾಡಿರುವುದು ನಿಜ. ಯೆಹೋವನು ವಾಗ್ದಾನ
ಮಾಡಿರುವ ದೇಶಕ್ಕೆ ಹೋಗಲು ನಾವು ಈಗ ಸಿದ್ಧ
ರಾಗಿದ್ದೇವೆ'' ಎಂದು ಹೇಳಿದರು.

[41]ಆದರೆ ಮೋಶೆ ಅವರಿಗೆ, ``ನೀವು ಯಾಕೆ ಹೀಗೆ
ಮಾಡಿ ಯೆಹೋವನ ಆಜ್ಞೆಯನ್ನು ಮೀರುತ್ತೀರಿ? ನೀವು
ಯಶಸ್ವಿಯಾಗುವುದಿಲ್ಲ. [42]ಯೆಹೋವನು ನಿಮ್ಮ ಸಂಗಡ
ಇರುವುದಿಲ್ಲ. ನೀವು ಆ ದೇಶಕ್ಕೆ ಹೋಗಬೇಡಿರಿ. ಇಲ್ಲ
ವಾದರೆ, ನಿಮ್ಮ ಶತ್ರುಗಳಿಂದ ಸೋಲಿಸಲ್ಪಡುವಿರಿ.
[43]ಅಮಾಲೇಕ್ಯರೂ ಕಾನಾನ್ಯರೂ ನಿಮ್ಮನ್ನು ಎದುರಿಸಲು
ಅಲ್ಲಿರುವುದರಿಂದ ನೀವು ಅವರ ಖಡ್ಗದಿಂದ ಸಾಯು
ವಿರಿ. ನೀವು ಯೆಹೋವನಿಗೆ ವಿರೋಧವಾಗಿ ದಂಗೆಯೆದ್ದ
ಕಾರಣ ಆತನು ನಿಮ್ಮೊಂದಿಗೆ ಇರುವುದಿಲ್ಲ'' ಎಂದು
ಹೇಳಿದನು.

[44]ಆದರೆ ಜನರು ಮೋಶೆಯ ಮಾತನ್ನು ನಂಬಲಿಲ್ಲ.
ಅವರು ಪರ್ವತ ಪ್ರದೇಶದ ಕಡೆಗೆ ಹೊರಟರು. ಆದರೆ
ಮೋಶೆಯೂ ಯೆಹೋವನ ಒಡಂಬಡಿಕೆಯ ಪೆಟ್ಟಿ

ಗೆಯೂ ಜನರೊಂದಿಗೆ ಹೋಗಲಿಲ್ಲ. [45]ಆಗ ಬೆಟ್ಟದ ಸೀಮೆಯಲ್ಲಿ ವಾಸವಾಗಿದ್ದ ಅಮಾಲೇಕ್ಯರೂ ಕಾನಾನ್ಯರೂ ಇಳಿದುಬಂದು ಅವರನ್ನು ಸೋಲಿಸಿ ಹೊರ್ಮಾ ಪಟ್ಟಣದವರೆಗೂ ಅಟ್ಟಿಸಿಕೊಂಡು ಬಂದು ಸಂಹರಿಸಿದರು.

### ಯಜ್ಞಗಳ ನಿಯಮಗಳು

15 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, [2]‘‘ಇಸ್ರೇಲರಿಗೆ ಹೀಗೆ ಆಜ್ಞಾಪಿಸಬೇಕು: ನಾನು ನಿಮ್ಮ ನಿವಾಸಕ್ಕಾಗಿ ಒಂದು ದೇಶವನ್ನು ಕೊಡುತ್ತಿದ್ದೇನೆ. ನೀವು ಆ ದೇಶಕ್ಕೆ ಸೇರಿದ ನಂತರ[3]ನೀವು ಯೆಹೋವನಿಗೆ ಸುವಾಸನೆಯನ್ನು ಉಂಟುಮಾಡುವುದಕ್ಕಾಗಿ ನಿಮ್ಮ ಮಂದೆಯಿಂದಾಗಲೀ ಹಿಂಡಿನಿಂದಾಗಲೀ ಅಗ್ನಿಯ ಮೂಲಕ ಯಜ್ಞವನ್ನರ್ಪಿಸುವವನು ಸರ್ವಾಂಗಹೋಮ ಮಾಡಿದರೂ ಅಥವಾ ಸಮಾಧಾನಯಜ್ಞ ಮಾಡಿದರೂ ಹರಕೆಯ ಯಜ್ಞ ಮಾಡಿದರೂ ಅಥವಾ ಸ್ವಇಚ್ಛೆಯಿಂದ ಯಜ್ಞಮಾಡಿದರೂ ನಿಯಮಿತ ಹಬ್ಬಗಳಲ್ಲಿ ಯಜ್ಞ ಮಾಡಿದರೂ [4]‘‘ಅದರೊಂದಿಗೆ ಧಾನ್ಯನೈವೇದ್ಯಕ್ಕಾಗಿ ಒಂದುವರೆ ಸೇರು ಎಣ್ಣೆ ಬೆರಸಿದ ಮೂರು ಸೇರು ಗೋಧಿಯ ಹಿಟ್ಟನ್ನೂ

[5]ಪಾನದ್ರವ್ಯಕ್ಕಾಗಿ ಒಂದುವರೆ ಸೇರು ದ್ರಾಕ್ಷಾರಸವನ್ನೂ ತರಬೇಕು. ನೀವು ಸರ್ವಾಂಗ ಹೋಮವಾಗಿ ಇಲ್ಲವೆ ಸಮಾಧಾನಯಜ್ಞವಾಗಿ ಸಮರ್ಪಿಸುವ ಒಂದೊಂದು ಕುರಿಯೊಂದಿಗೆ ಇದನ್ನೂ ಸಮರ್ಪಿಸಬೇಕು. [6]‘‘ನೀವು ಟಗರನ್ನು ಸಮರ್ಪಿಸುವುದಾದರೆ, ಧಾನ್ಯನೈವೇದ್ಯಕ್ಕಾಗಿ ಎರಡು ಸೇರು ಎಣ್ಣೆ ಬೆರಸಿದ ಆರು ಸೇರು ಒಳ್ಳೆಯ ಗೋಧಿಯ ಹಿಟ್ಟನ್ನೂ [7]ಪಾನದ್ರವ್ಯಕ್ಕಾಗಿ ಎರಡು ಸೇರು ದ್ರಾಕ್ಷಾರಸವನ್ನೂ ಸಮರ್ಪಿಸಬೇಕು. ಅದು ಯೆಹೋವನಿಗೆ ಸುವಾಸನೆಯನ್ನು ಉಂಟು ಮಾಡುವ ಯಜ್ಞವಾಗಿರುತ್ತದೆ.

[8]‘‘ನಿಮ್ಮಲ್ಲಿ ಎಳೆಹೋರಿಯನ್ನು ಯೆಹೋವನಿಗೆ ಸರ್ವಾಂಗಹೋಮವನ್ನಾಗಲೀ ಹರಕೆಯ ಯಜ್ಞವನ್ನಾಗಲೀ ಸಮಾಧಾನಯಜ್ಞವನ್ನಾಗಲೀ ಅರ್ಪಿಸುವವನು [9]ಅದರೊಂದಿಗೆ ಧಾನ್ಯನೈವೇದ್ಯಕ್ಕಾಗಿ ಮೂರು ಸೇರು ಎಣ್ಣೆ ಬರಸಿದ ಒಂಭತ್ತು ಸೇರು ಗೋಧಿಯ ಹಿಟ್ಟನ್ನೂ [10]ಪಾನದ್ರವ್ಯಕ್ಕಾಗಿ ಮೂರು ಸೇರು ದ್ರಾಕ್ಷಾರಸವನ್ನೂ ತಂದು ಸಮರ್ಪಿಸಬೇಕು. ಇದು ಅಗ್ನಿಯ ಮೂಲಕ ಸಮರ್ಪಿಸುವ ಯಜ್ಞವಾಗಿದೆ. ಇದರ ಸುವಾಸನೆಯು ಯೆಹೋವನಿಗೆ ಮೆಚ್ಚಿಕೆಯನ್ನು ಉಂಟುಮಾಡುತ್ತದೆ. [11]ಕುರಿ, ಆಡು, ಟಗರು, ಹೋರಿ ಇವುಗಳಲ್ಲಿ ಯಾವುದನ್ನು ಅರ್ಪಿಸಿದರೂ ಇದನ್ನು ಮಾಡಲೇಬೇಕು. [12]ನೀವು ಸಮರ್ಪಿಸುವ ಪಶುಗಳ ಲೆಕ್ಕದ ಪ್ರಕಾರವೇ ಒಂದೊಂದು ಪಶುವಿನ ಸಂಗಡ ಈ ಮೇರೆಗೆ ಮಾಡಬೇಕು.

[13]‘‘ಇಸ್ರೇಲಿನ ಪ್ರತಿಯೊಬ್ಬ ಸ್ವದೇಶಿಯೂ ಯೆಹೋವನಿಗೆ ಸುಗಂಧಹೋಮವನ್ನು ಸಮರ್ಪಿಸುವಾಗ ಈ ರೀತಿಯಾಗಿ ಮಾಡಬೇಕು. [14]ನಿಮ್ಮ ಮಧ್ಯದಲ್ಲಿ ವಾಸಿಸುವ ವಿದೇಶಿಯರಲ್ಲಿ ಯಾವನೇ ಆಗಲಿ, ಯೆಹೋವನಿಗೆ ಸುಗಂಧಹೋಮ ಮಾಡಬೇಕಾದರೆ ನಿಮ್ಮಂತಯೇ ಅವನು ಮಾಡಬೇಕು. [15]ನಿಮಗೂ ನಿಮ್ಮಲ್ಲಿರುವ ಪರದೇಶದವರಿಗೂ ಒಂದೇ ವಿಧಿಯಿರಬೇಕು. ಇದು ನಿಮಗೂ ನಿಮ್ಮ ಸಂತತಿಯವರಿಗೂ ಶಾಶ್ವತ ನಿಯಮ. ಯೆಹೋವನ ಸನ್ನಿಧಿಯಲ್ಲಿ ನೀವೂ ಪರದೇಶಿಯರೂ ಒಂದೇ ಆಗಿದ್ದೀರಿ. [16]ನಿಮಗೂ ನಿಮ್ಮ ಬಳಿಯಲ್ಲಿ ವಾಸಿಸುವ ಪರದೇಶದವನಿಗೂ ಒಂದೇ ವಿಧವಾದ ಪ್ರಮಾಣ ವಿಧಿಗಳಿರಬೇಕು.’’

[17]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, [18]‘‘ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು: ನಾನು ನಿಮ್ಮನ್ನು ಇನ್ನೊಂದು ದೇಶಕ್ಕೆ ಕರೆದುಕೊಂಡು ಹೋಗುತ್ತಿದ್ದೇನೆ. [19]ನೀವು ಆ ದೇಶದ ಭೂಮಿಯ ಬೆಳೆಯನ್ನು ಅನುಭೋಗಿಸುವಾಗ, ಸ್ವಲ್ಪವನ್ನು ಪ್ರಭುವಿಗೋಸ್ಕರ ಪ್ರತ್ಯೇಕಿಸಬೇಕು. [20]ನೀವು ಕಣದಲ್ಲಿರುವ ಗೋಧಿಯಲ್ಲಿ ಪ್ರಥಮ ಫಲವನ್ನು ಯೆಹೋವನಿಗೆ ಕಾಣಿಕೆಯಾಗಿ ಕೊಡುವಂತೆಯೇ ನೀವು ಪ್ರಥಮವಾಗಿ ನಾದಿದ ಹಿಟ್ಟಿನಿಂದ ಒಂದು ರೊಟ್ಟಿಯನ್ನು ಯೆಹೋವನಿಗೆ ಕಾಣಿಕೆಯಾಗಿ ಕೊಡಬೇಕು. [21]ನೀವೂ ನಿಮ್ಮ ಸಂತತಿಯವರೂ ಕಣಕದಿಂದ ಮಾಡುವ ಮೊದಲನೆಯ ರೊಟ್ಟಿಯನ್ನು ಯೆಹೋವನಿಗೋಸ್ಕರ ಪ್ರತ್ಯೇಕಿಸಬೇಕು.

[22-23]‘‘ಯೆಹೋವನು ಮೋಶೆಯ ಮೂಲಕ ಪ್ರಕಟಿಸಿದ ಆಜ್ಞೆಗಳನ್ನು ಅಂದರೆ ಯೆಹೋವನು ಆಜ್ಞೆಯನ್ನು ಕೊಟ್ಟ ದಿನದಿಂದಿಡಿದು ಮುಂದಿನ ಎಲ್ಲಾ ಕಾಲದಲ್ಲಿ ನೀವು ತಿಳಿಯದೆ ಯೆಹೋವನ ಆಜ್ಞೆಗಳನ್ನು ಉಲ್ಲಂಘಿಸಿದರೆ ಹೀಗೆ ಮಾಡಬೇಕು: [24]ನಿರುದ್ದೇಶದಿಂದ ಮತ್ತು ಸಮುದಾಯಕ್ಕೆ ತಿಳಿಯದಂತೆ ಇದನ್ನು ಮಾಡಿದ್ದಾಗಿದ್ದರೆ, ಯೆಹೋವನಿಗೆ ಸುಗಂಧ ವಾಸನೆಯನ್ನು ಉಂಟುಮಾಡುವುದಕ್ಕಾಗಿ ಒಂದು ಎಳೆಹೋರಿಯನ್ನು ಸರ್ವಾಂಗಹೋಮವಾಗಿ ಅರ್ಪಿಸಬೇಕು ಮತ್ತು ಅದರೊಡನೆ ಧಾನ್ಯಾರ್ಪಣೆಯನ್ನೂ ಪಾನಾರ್ಪಣೆಯನ್ನೂ ಪಾಪಪರಿಹಾರಕ ಯಜ್ಞವಾಗಿ ಒಂದು ಹೋತವನ್ನೂ ಅರ್ಪಿಸಬೇಕು.

[25]‘‘ಈ ರೀತಿಯಲ್ಲಿ ಇಸ್ರೇಲರ ಇಡೀ ಸಮುದಾಯದವರ ಕ್ಷಮೆಗಾಗಿ ಯಾಜಕನು ಪ್ರಾಯಶ್ಚಿತ್ತ ಮಾಡುವನು. ಯಾಕಂದರೆ ಅದು ತಿಳಿಯದೆ ಮಾಡಿದ ತಪ್ಪಾಗಿತ್ತು ಮತ್ತು ಆ ತಪ್ಪಿಗಾಗಿ ಅವರು ತಮ್ಮ ಅರ್ಪಣೆಯನ್ನು

ಯೆಹೋವನಿಗೆ ಕಾಣಿಕೆಯಾಗಿ ತಂದರು ಮತ್ತು
ಯೆಹೋವನ ಎದುರಿನಲ್ಲಿ ಪಾಪಪರಿಹಾರಕ ಯಜ್ಞವನ್ನು
ಅರ್ಪಿಸಿದರು. 26ಆದ್ದರಿಂದ ಇಡೀ ಇಸ್ರೇಲ್ ಸಮುದಾ
ಯದವರಿಗೆ ಕ್ಷಮಾಪಣೆಯಾಗುವುದು ಮತ್ತು ಅವರ
ಮಧ್ಯದಲ್ಲಿ ವಾಸಿಸುವ ಪರದೇಶಸ್ಥರಿಗೂ ಕ್ಷಮಾಪಣೆ
ಯಾಗುವುದು; ಯಾಕಂದರೆ ಜನರೆಲ್ಲರೂ ನಿರುದ್ದೇಶ
ದಿಂದ ಮಾಡಿದ ಆ ತಪ್ಪಿನಲ್ಲಿ ಸಿಕ್ಕಿಕೊಂಡಿದ್ದರು.

27‘‘ಆದರೆ ಒಬ್ಬನು ತಿಳಿಯದೆ ಪಾಪಮಾಡಿದರೆ,
ಅವನು ಒಂದು ವರುಷದ ಹೆಣ್ಣು ಆಡನ್ನು ದೋಷ ಪರಿ
ಹಾರಕ ಯಜ್ಞವಾಗಿ ಅರ್ಪಿಸಬೇಕು. 28ಆಗ ಯಾಜಕನು
ನಿರುದ್ದೇಶದಿಂದ ತಪ್ಪುಮಾಡಿದವನ ಕ್ಷಮಾಪಣೆಗಾಗಿ
ಯೆಹೋವನ ಸನ್ನಿಧಿಯಲ್ಲಿ ಪ್ರಾಯಶ್ಚಿತ್ತ ಮಾಡುವನು.
29ನಿರುದ್ದೇಶದಿಂದ ತಪ್ಪುಮಾಡಿದ ಪ್ರತಿಯೊಬ್ಬರಿಗೂ ಈ
ನಿಯಮ ಅನ್ವಯಿಸುತ್ತದೆ. ಈ ವಿಷಯದಲ್ಲಿ ಇಸ್ರೇಲ
ರಲ್ಲಿರುವ ಸ್ವದೇಶದವರಿಗೂ ಪರದೇಶದವರಿಗೂ
ಒಂದೇ ವಿಧಿಯಿರಬೇಕು.

30‘‘ಆದರೆ ಉದ್ದೇಶಪೂರ್ವಕವಾಗಿ ಪಾಪಮಾಡು
ವವನು ಯೆಹೋವನಿಗೆ ಅವಮಾನ ಮಾಡುವವ
ನಾಗಿದ್ದಾನೆ. ಅವನನ್ನು ಕುಲದಿಂದ ಬಹಿಷ್ಕರಿಸಬೇಕು. ಈ
ನಿಯಮವು ಇಸ್ರೇಲರಲ್ಲಿ ಹುಟ್ಟಿದ ಪ್ರತಿಯೊಬ್ಬನಿಗೂ
ಹಾಗೂ ಪರದೇಶಸ್ಥರಿಗೂ ಅನ್ವಯಿಸುವುದು. 31ಆ
ಮನುಷ್ಯನು ಯೆಹೋವನ ಮಾತನ್ನು ತಾತ್ಸಾರ ಮಾಡಿ
ಆತನ ಆಜ್ಞೆಯನ್ನು ಮೀರಿದ್ದರಿಂದ ಕುಲದಿಂದ ತೆಗೆದು
ಹಾಕಲ್ಪಡಲೇಬೇಕು. ಅವನು ತನ್ನ ಪಾಪದ ಫಲವನ್ನು
ಅನುಭವಿಸಲಿ.’’

## ಸಬ್ಬತ್ ದಿನದಲ್ಲಿ ಕೆಲಸಮಾಡುವ ಮನುಷ್ಯನು

32ಇಸ್ರೇಲರು ಮರುಭೂಮಿಯಲ್ಲಿ ಇನ್ನೂ ಇದ್ದಾಗ
ಒಬ್ಬನು ಸಬ್ಬತ್ ದಿನದಲ್ಲಿ ಕಟ್ಟಿಗೆ ಕೂಡಿಸುವುದನ್ನು
ಜನರು ಕಂಡರು. 33ಕಂಡವರು ಅವನನ್ನು ಮೋಶೆ
ಆರೋನರ ಮತ್ತ ಸರ್ವಸಮೂಹದವರ ಬಳಿಗೆ ಹಿಡು
ಕೊಂಡು ಬಂದರು. 34ಅವನನ್ನು ಶಿಕ್ಷಿಸಬೇಕಾದ ವಿಧಿ
ಯನ್ನು ಅವರು ತಿಳಿಯದೆ ಇದ್ದುದರಿಂದ ಅವನನ್ನು
ಕಾವಲಲ್ಲಿಟ್ಟರು.

35ಆಗ ಯೆಹೋವನು ಮೋಶೆಗೆ, ‘‘ಆ ಮನುಷ್ಯನು
ಸಾಯಬೇಕು. ಅವನನ್ನು ಪಾಳೆಯದ ಹೊರಗೆ ತೆಗೆದು
ಕೊಂಡು ಹೋಗಿ ಎಲ್ಲಾ ಜನರು ಕಲ್ಲೆಸೆದು ಕೊಲ್ಲ
ಬೇಕು’’ ಎಂದು ಹೇಳಿದನು. 36ಆಗ ಜನರು ಅವನನ್ನು
ಪಾಳೆಯದ ಹೊರಗೆ ಕರೆದುಕೊಂಡು ಹೋಗಿ ಕಲ್ಲೆಸೆದು
ಕೊಂದರು. ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆ
ಅವರು ಇದನ್ನು ಮಾಡಿದರು.

## ಜನರು ವಿಧಿಗಳನ್ನು ಜ್ಞಾಪಕ ಮಾಡುವಂತೆ ದೇವರು ಸಹಾಯ ಮಾಡಿದ್ದು

37ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
38‘‘ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು: ನನ್ನ ಅಪ್ಪಣೆ
ಗಳನ್ನು ಜ್ಞಾಪಕಮಾಡುವುದಕ್ಕೆ ನಿಮಗೆ ಒಂದು
ಗುರುತನ್ನು ಕೊಡುತ್ತೇನೆ. ನಿಮ್ಮ ಬಟ್ಟೆಗಳ ಮೂಲೆಯಲ್ಲಿ
ಗೊಂಡೆಗಳನ್ನು ಕಟ್ಟಿಕೊಳ್ಳಬೇಕು. ಪ್ರತಿಯೊಂದು
ಗೊಂಡೆಯೂ ಒಂದೊಂದು ನೀಲಿ ದಾರದಿಂದ ಕೂಡಿರ
ಬೇಕು. ನೀವು ಇವುಗಳನ್ನು ಇಂದಿನಿಂದ ಯಾವಾಗಲೂ
ಧರಿಸಿಕೊಳ್ಳಬೇಕು. 39ಈ ಗೊಂಡೆಗಳನ್ನು ನೀವು
ನೋಡುವಾಗ, ಯೆಹೋವನು ನಿಮಗೆ ಕೊಟ್ಟ ಅಪ್ಪಣೆ
ಗಳನ್ನೆಲ್ಲ ಜ್ಞಾಪಕ ಮಾಡಿಕೊಳ್ಳಬೇಕು ಮತ್ತು ಅವುಗಳಿಗೆ
ವಿಧೇಯರಾಗಬೇಕು. ನೀವು ನಿಮ್ಮ ಮನಸ್ಸಿಗೆ ಮತ್ತು
ಕಣ್ಣಿಗೆ ತೋರಿದ ಪ್ರಕಾರ ನಡೆಯದೆ ನಂಬಿಗಸ್ತರಾಗಿರ
ಬೇಕು. 40ನೀವು ನನ್ನ ಎಲ್ಲಾ ಆಜ್ಞೆಗಳನ್ನು ಜ್ಞಾಪಿಸಿ
ಕೊಂಡು ವಿಧೇಯರಾಗಿರಬೇಕು. ಆಗ ನೀವು ನಿಮ್ಮ
ದೇವರ ವಿಶೇಷವಾದ ಜನರಾಗಿರುವಿರಿ. 41‘‘ನಿಮ್ಮ ದೇವ
ರಾಗಿರುವುದಕ್ಕೆ ನಿಮ್ಮನ್ನು ಈಜಿಪ್ಟಿನಿಂದ ಹೊರಗೆ
ಕರೆತಂದ ನಿಮ್ಮ ದೇವರಾದ ಯೆಹೋವನು ನಾನೇ.’’

## ಮೋಶೆಗೆ ವಿರುದ್ಧ ದಂಗೆ ಎದ್ದದ್ದು

16 ಕೋರಹ, ದಾತಾನ್, ಅಬೀರಾಮ್ ಮತ್ತು
ಓನ್ ಎಂಬವರು ಮೋಶೆಗೆ ವಿರುದ್ಧವಾಗಿ
ಎದ್ದರು. (ಕೋರಹನು ಇಚ್ಹಾರನ ಮಗನು, ಇಚ್ಹಾರನು
ಕೆಹಾತನ ಮಗನು. ಕೆಹಾತನು ಲೇವಿಯ ಮಗನು.
ದಾತಾನ್ ಮತ್ತು ಅಬೀರಾಮ್ ಇವರು ಎಲೀಯಾಬನ
ಗಂಡು ಮಕ್ಕಳು ಮತ್ತು ಓನನು ಪೆಲೆತನ ಮಗನು.
ದಾತಾನ್, ಅಬೀರಾಮ್ ಮತ್ತು ಓನ್ ಇವರು
ರೂಬೇನನ ಸಂತತಿಯವರು.) 2ಈ ನಾಲ್ಕು ಮಂದಿ
ಇಸ್ರೇಲರು ಇನ್ನಿತರ ಇನ್ನೂರೈವತ್ತು ಗಂಡಸರೊಂದಿಗೆ
ಮೋಶೆಗೆ ವಿರುದ್ಧವಾಗಿ ಎದ್ದರು. ಅವರು ಜನರಿಂದ
ಆರಿಸಲ್ಪಟ್ಟ ನಾಯಕರಾಗಿದ್ದುದರಿಂದ ಜನರೆಲ್ಲರೂ
ಅವರನ್ನು ಬಲ್ಲವರಾಗಿದ್ದರು. 3ಅವರು ಮೋಶೆ ಮತ್ತು
ಆರೋನರ ವಿರುದ್ಧ ಒಟ್ಟಾಗಿ ಸೇರಿಬಂದು, ಅವರಿಗೆ,
‘‘ನೀವು ಅಧಿಕಾರವನ್ನು ಮತ್ತು ಘನತೆಯನ್ನು ಅತಿಯಾಗಿ
ಅಪೇಕ್ಷಿಸುತ್ತಿರುವಿರಿ. ಈ ಸಮೂಹದವರಲ್ಲಿರುವ ಪ್ರತಿ
ಯೊಬ್ಬನೂ ದೇವರಿಗೆ ಪ್ರತಿಷ್ಠಿತನೇ. ಯೆಹೋವನು
ಇವರೆಲ್ಲರ ಮಧ್ಯದಲ್ಲಿ ಇದ್ದಾನೆ. ಹೀಗಿರಲಾಗಿ
ಯೆಹೋವನ ಜನರಿಗಿಂತಲೂ ನಿಮ್ಮನ್ನು ನೀವೇ ಹೆಚ್ಚಿಸಿ
ಕೊಳ್ಳುವುದೇನು?’’ ಎಂದು ಕೇಳಿದರು.

4ಮೋಶೆ ಇದನ್ನು ಕೇಳಿ ನೆಲದವರೆಗೆ ಬಾಗಿ 5ಕೋರಹ
ಮತ್ತು ಅವನ ಹಿಂಬಾಲಕರೆಲ್ಲರಿಗೆ ಹೇಳಿದ್ದೇನೆಂದರೆ,

‘‘ನಾಳೆ ಮುಂಜಾನೆ ಯಾವನು ಯೆಹೋವನವನೆಂದು
ಯೆಹೋವನು ತೋರಿಸುವನು. ಯಾವನು ಪ್ರತಿಷ್ಠಿತ
ನೆಂದು ಯೆಹೋವನು ತೋರಿಸುವನು ಮತ್ತು
ಯೆಹೋವನು ಅವನನ್ನು ತನ್ನ ಹತ್ತಿರ ಕರೆದುಕೊಳ್ಳು
ವನು. 6ಆದ್ದರಿಂದ ಕೋರಹನೇ, ನೀನೂ ನಿನ್ನ ಹಿಂಬಾ
ಲಕರೆಲ್ಲರೂ ಈ ಕಾರ್ಯವನ್ನು ಮಾಡಬೇಕು. 7ನಾಳೆ
ಅಗ್ಗಿಷ್ಟಿಕೆಗಳನ್ನು ತೆಗೆದುಕೊಂಡು ಅವುಗಳ ಮೇಲೆ
ಉರಿಯುವ ಕೆಂಡಗಳನ್ನು ಹಾಕಿರಿ ಮತ್ತು ಯೆಹೋವನ
ಮುಂದೆ ಅವುಗಳ ಮೇಲೆ ಧೂಪವನ್ನು ಹಾಕಿರಿ. ಆಗ
ಯೆಹೋವನು ಯಾರನ್ನು ಆರಿಸಿಕೊಳ್ಳುವನೊ ಅವನೇ
ನಿಜವಾಗಿಯೂ ಪವಿತ್ರನಾದವನು. ಲೇವಿಯರಾದ ನೀವು
ಅಧಿಕಾರವನ್ನು ಮತ್ತು ಘನತೆಯನ್ನು ಅತಿಯಾಗಿ
ಅಪೇಕ್ಷಿಸುತ್ತೀರಿ.’’ 8ಮೋಶೆಯು ಕೋರಹನಿಗೆ, ‘‘ಲೇವಿ
ಯರೇ, ಕೇಳಿರಿ! 9ಇಸ್ರೇಲರ ದೇವರು ನಿಮ್ಮನ್ನು
ಸರ್ವಸಮೂಹದಿಂದ ಆರಿಸಿಕೊಂಡದ್ದಕ್ಕಾಗಿ ನೀವು
ಸಂತೋಷಪಡಬೇಕು. ದೇವರ ಪವಿತ್ರ ಗುಡಾರಕ್ಕೆ
ಸಂಬಂಧಿಸಿದ ಕೆಲಸವನ್ನು ಮಾಡುವುದಕ್ಕೂ ಇಸ್ರೇಲರ
ಸೇವೆಯನ್ನು ಮಾಡುವುದಕ್ಕೂ ಮತ್ತು ಯಜ್ಞಗಳನ್ನು
ಸಿದ್ಧಪಡಿಸುವುದರಲ್ಲಿ ಅವರಿಗೆ ಸಹಾಯಕರಾಗಿರ
ಬೇಕೆಂದು ಯೆಹೋವನು ನಿಮ್ಮನ್ನು ತನ್ನ ಸಮೀಪಕ್ಕೆ
ಬರಗೊಡಿಸಿದ್ದಾನೆ. ಅದು ನಿಮಗೆ ಸಾಕಾಗಲಿಲ್ಲವೇ?
10ಈ ರೀತಿ ಆತನ ಬಳಿಯಲ್ಲಿ ಸೇವೆಮಾಡಲು ನಿನಗೂ
ನಿನ್ನ ಸಹೋದ್ಯೋಗಿಗಳಾದ ಎಲ್ಲಾ ಲೇವಿಯರಿಗೂ
ಯೆಹೋವನು ಅವಕಾಶ ಕೊಟ್ಟಿದ್ದಾನೆ. ಆದರೆ ಈಗ
ನೀವು ಯಾಜಕರಾಗಬೇಕೆಂದು ಸಹ ಪ್ರಯತ್ನಿಸುತ್ತಿದ್ದೀರಿ.
11ನೀವೂ ನಿಮ್ಮ ಹಿಂಬಾಲಕರೂ ಒಟ್ಟಾಗಿ ಸೇರಿಕೊಂಡು
ಯೆಹೋವನಿಗೆ ವಿರೋಧವಾಗಿ ದಂಗೆ ಎದ್ದಿದ್ದೀರಿ.
ಆರೋನನು ತನ್ನನ್ನು ತಾನೇ ಮಹಾಯಾಜಕನನ್ನಾಗಿ
ಆರಿಸಿಕೊಂಡನೋ? ಇಲ್ಲ! ಹೀಗಿರಲು ಆರೋನನಿಗೆ
ವಿರೋಧವಾಗಿ ಗುಣಗುಟ್ಟುವುದೇಕೆ?’’ ಎಂದು
ಹೇಳಿದನು.

12ಬಳಿಕ ಮೋಶೆ ಎಲೀಯಾಬನ ಗಂಡುಮಕ್ಕಳಾದ
ದಾತಾನನನ್ನೂ ಅಬೀರಾಮನನ್ನೂ ಕರೆಕಳುಹಿಸಲಾಗಿ,
ಅವರು ಅವನಿಗೆ, ‘‘ನಾವು ಬರುವುದಿಲ್ಲ. 13ನೀನು
ಹಾಲೂ ಜೇನೂ ಹರಿಯುವ ದೇಶದಿಂದ ನಮ್ಮನ್ನು
ಕರೆದುಕೊಂಡು ಬಂದು ಮರಳುಗಾಡಿನಲ್ಲಿ ಸಾಯಿಸು
ವುದು ಸಾಕಾಗಲಿಲ್ಲವೆಂದು ಭಾವಿಸಿ ನಮ್ಮ ಮೇಲೆ
ದೊರೆತನ ಮಾಡಲು ಅಪೇಕ್ಷಿಸುತ್ತಿರುವೆಯೋ? 14ನಾವು
ನಿನ್ನನ್ನು ಯಾಕೆ ಹಿಂಬಾಲಿಸಬೇಕು? ನೀನು ನಮ್ಮನ್ನು
ಹಾಲೂ ಜೇನೂ ಹರಿಯುವ ದೇಶಕ್ಕೆ ಕರೆದುಕೊಂಡು
ಬರಲಿಲ್ಲ. ನೀನು ನಮ್ಮ ಸ್ವಂತಕ್ಕೆ ಹೊಲಗಳನ್ನಾಗಲೀ
ದ್ರಾಕ್ಷೆತೋಟಗಳನ್ನಾಗಲೀ ಕೊಡಲಿಲ್ಲ! ನೀನು ಈ
ಜನರಿಗೆ ಇದೇ ರೀತಿ ಮೋಸಮಾಡಬೇಕೆಂದಿ
ರುವೆಯೋ? ನಾವು ಬರುವುದಿಲ್ಲ’’ ಎಂದು ಹೇಳಿದರು.

15ಇದರಿಂದ ಮೋಶೆ ಬಹಳ ಕೋಪಗೊಂಡನು.
ಅವನು ಯೆಹೋವನಿಗೆ, ‘‘ನಾನು ಈ ಜನರಿಗೆ ಎಂದೂ
ತೊಂದರೆ ಮಾಡಲಿಲ್ಲ. ಅವರಿಂದ ನಾನು ಒಂದು ಕತ್ತೆ
ಯನ್ನಾದರೂ ತೆಗೆದುಕೊಂಡವನಲ್ಲ. ಯೆಹೋವನೇ,
ಅವರ ಕಾಣಿಕೆಯನ್ನು ಸ್ವೀಕರಿಸಬೇಡ’’ ಎಂದು
ಹೇಳಿದನು.

16ಆಗ ಮೋಶೆಯು ಕೋರಹನಿಗೆ, ‘‘ನೀನು ಮತ್ತು
ನಿನ್ನ ಹಿಂಬಾಲಕರೆಲ್ಲರು ನಾಳೆ ಯೆಹೋವನ ಸನ್ನಿಧಿ
ಯಲ್ಲಿ ಆರೋನನೊಡನೆ ನಿಲ್ಲಬೇಕು. 17ನಿಮ್ಮಲ್ಲಿ ಪ್ರತಿ
ಯೊಬ್ಬನು ತನ್ನತನ್ನ ಧೂಪಾರತಿಯನ್ನು ಅಂದರೆ ಒಟ್ಟಾಗಿ
ಇನ್ನೂರೈವತ್ತು ಧೂಪಾರತಿಗಳನ್ನು ತೆಗೆದುಕೊಂಡು
ಧೂಪಹಾಕಿ ಯೆಹೋವನ ಸನ್ನಿಧಿಗೆ ಬರಬೇಕು.
ಹಾಗೆಯೇ ನೀನೂ ಆರೋನನೂ ನಿಮ್ಮನಿಮ್ಮ ಧೂಪಾ
ರತಿಗಳನ್ನು ತೆಗೆದುಕೊಂಡು ಬರಬೇಕು’’ ಎಂದು
ಹೇಳಿದನು.

18ಅದಕ್ಕನುಸಾರವಾಗಿ ಅವರೆಲ್ಲರೂ ತಮ್ಮತಮ್ಮ
ಧೂಪಾರತಿಗಳನ್ನು ಕೈಯಲ್ಲಿ ತೆಗೆದುಕೊಂಡು ಅವುಗಳಲ್ಲಿ
ಕೆಂಡಗಳನ್ನಿಟ್ಟು ಧೂಪದ್ರವ್ಯಗಳನ್ನು ಹಾಕಿ ಮೋಶೆ
ಆರೋನರ ಜೊತೆಯಲ್ಲಿ ದೇವದರ್ಶನಗುಡಾರದ
ಪ್ರವೇಶದ್ವಾರದಲ್ಲಿ ನಿಂತುಕೊಂಡರು. 19ಕೋರಹನು
ತಮಗೆ ಎದುರಾಗಿ ಸರ್ವಸಮೂಹದವರನ್ನು ದೇವ
ದರ್ಶನಗುಡಾರದ ಪ್ರವೇಶದ್ವಾರದ ಹತ್ತಿರಕ್ಕೆ ಕೂಡಿಸಿ
ದನು. ಆಗ ಯೆಹೋವನ ಮಹಿಮೆ ಸಮೂಹ
ದವರೆಲ್ಲರಿಗೆ ಹೊಳೆಯಿತು.

20ಯೆಹೋವನು ಮೋಶೆ ಆರೋನರಿಗೆ, 21‘‘ಈ
ಜನರನ್ನು ಬಿಟ್ಟು ಪ್ರತ್ಯೇಕವಾಗಿ ನಿಲ್ಲಿರಿ. ನಾನು ಅವರನ್ನು
ಈಗ ನಾಶಮಾಡಬಯಸುತ್ತೇನೆ’’ ಅಂದನು.

22ಆದರೆ ಮೋಶೆ ಆರೋನರು ನೆಲದವರೆಗೆ ಬಾಗಿ,
‘‘ದೇವರೇ, ಎಲ್ಲಾ ಜನರ ಆಲೋಚನೆ ನಿನಗೆ ಗೊತ್ತಿದೆ.
ದಯಮಾಡಿ ಎಲ್ಲಾ ಜನರ ಮೇಲೆ ಕೋಪಗೊಳ್ಳಬೇಡ.
ನಿಜವಾಗಿ ಪಾಪಮಾಡಿದವನು ಕೇವಲ ಒಬ್ಬನಲ್ಲವೇ?’’
ಎಂದು ಮೊರೆಯಿಟ್ಟನು.

23ಆಗ ಯೆಹೋವನು ಮೋಶೆಗೆ, 24‘‘ಜನರಿಗೆ
ಕೋರಹ, ದಾತಾನ್ ಮತ್ತು ಅಬೀರಾಮರ ಗುಡಾರದ
ಸುತ್ತಮುತ್ತಲಿಂದ ದೂರಹೋಗಬೇಕೆಂದು ಆಜ್ಞಾಪಿಸು’’
ಎಂದು ಹೇಳಿದನು.

25ಮೋಶೆಯು ಎದ್ದು ಕೋರಹ, ದಾತಾನ್ ಮತ್ತು
ಅಬೀರಾಮರ ಬಳಿಗೆ ಹೋದನು. ಇಸ್ರೇಲರ ಹಿರಿಯ
ರೆಲ್ಲರೂ ಅವನನ್ನು ಹಿಂಬಾಲಿಸಿದರು. 26ಮೋಶೆಯು
ಜನರನ್ನು ಎಚ್ಚರಿಸಿ, ‘‘ಈ ಕೆಟ್ಟ ಜನರ ಗುಡಾರಗಳಿಂದ

ಹೊರಟು ಹೋಗಿರಿ. ಇವರ ಸ್ವತ್ತಿನಲ್ಲಿ ಯಾವುದನ್ನೂ
ಮುಟ್ಟಬಾರದು. ಇಲ್ಲವಾದರೆ ಅವರ ಪಾಪಗಳ ದೆಸೆ
ಯಿಂದ ನೀವೂ ನಾಶವಾಗುವಿರಿ'' ಎಂದು ಹೇಳಿದನು.
27ಆದ್ದರಿಂದ ಜನರು ಕೋರಹ, ದಾತಾನ್ ಮತ್ತು
ಅಬೀರಾಮರ ಗುಡಾರಗಳನ್ನು ಬಿಟ್ಟು ದೂರಹೋದರು.
ದಾತಾನ್ ಮತ್ತು ಅಬೀರಾಮ್ ಹೊರಗೆ ಬಂದು ತಮ್ಮ
ಡೇರೆಗಳ ಪ್ರವೇಶದ್ವಾರದ ಬಳಿ ತಮ್ಮ ಹೆಂಡತಿಯ
ರೊಡನೆ, ಮಕ್ಕಳೊಡನೆ ಮತ್ತು ಕೂಸುಗಳೊಡನೆ
ನಿಂತುಕೊಂಡರು.
28ಆಗ ಮೋಶೆ ಜನರಿಗೆ, ''ಈ ಕಾರ್ಯಗಳೆಲ್ಲಾ ನನ್ನ
ಆಲೋಚನೆಯಿಂದ ಆಗಲಿಲ್ಲವೆಂದೂ ಯೆಹೋವನೇ
ಈ ಕಾರ್ಯಗಳನ್ನು ಮಾಡುವುದಕ್ಕೆ ನನ್ನನ್ನು ಕಳುಹಿಸಿ
ದನೆಂದು ನೀವು ತಿಳಿದುಕೊಳ್ಳುವಂತೆ ನಾನು ಸಾಕ್ಷಿಯನ್ನು
ಕೊಡುವೆನು. 29ಇಲ್ಲಿರುವ ಜನರು ಸಾಯುವರು. ಆದರೆ
ಇವರ ಅಂತ್ಯವು ಎಲ್ಲರಿಗೂ ಸಂಭವಿಸುವ ಅಂತ್ಯ
ವಾಗಿದ್ದರೆ, ಯೆಹೋವನು ನನ್ನನ್ನು ಕಳುಹಿಸಲಿಲ್ಲವೆಂದು
ತಿಳಿದುಕೊಳ್ಳಬೇಕು. 30ಆದರೆ ಯೆಹೋವನು ಇವರಿ
ಗೋಸ್ಕರ ಅಪೂರ್ವ ಶಿಕ್ಷೆಯನ್ನು ಕಲ್ಪಿಸಿದರೆ ಅಂದರೆ
ಭೂಮಿಯು ಬಾಯ್ದೆರೆದು ಇವರನ್ನೂ ಇವರ ಸರ್ವ
ಸ್ವವನ್ನೂ ನುಂಗುವುದರಿಂದ ಇವರೆಲ್ಲರೂ ಸಜೀವಿಗಳಾಗಿ
ಸಮಾಧಿಯಾದರೆ, ಇವರು ನಿಜವಾಗಿಯೂ ಯೆಹೋವ
ನನ್ನು ತಿರಸ್ಕರಿಸಿದವರೆಂದು ನೀವು ತಿಳಿದುಕೊಳ್ಳಬೇಕು''
ಎಂದನು. 31ಕೂಡಲೇ, ಆ ಜನರು ನಿಂತಿದ್ದ ನೆಲವು
ಸೀಳಿತು. 32ಭೂಮಿಯೇ ಬಾಯಿತೆರೆದು ಅವರನ್ನು
ನುಂಗಿಬಿಟ್ಟಿತೊ ಎಂಬಂತೆ, ಅವರ ಕುಟುಂಬಗಳವರನ್ನು
ಕೋರಹನ ಎಲ್ಲಾ ಹಿಂಬಾಲಕರನ್ನು ಮತ್ತು ಅವರ
ಆಸ್ತಿಯೆಲ್ಲವನ್ನು ನುಂಗಿಬಿಟ್ಟಿತು. 33ಆ ಜನರೆಲ್ಲಾ ಸಜೀವ
ಸಮಾಧಿಯಾದರು. ಅವರ ಆಸ್ತಿಪಾಸ್ತಿಯೆಲ್ಲಾ ಅವ
ರೊಡನೆ ಭೂಸಮಾಧಿಯಾಯಿತು. ಆ ಬಳಿಕ ಭೂಮಿ
ಅವರ ಸಮೇತವಾಗಿ ಮುಚ್ಚಿಕೊಂಡಿತು. ಅದೇ ಅವರ
ಅಂತ್ಯವಾಯಿತು. ಅವರು ಸಮುದಾಯದಿಂದ ಶಾಶ್ವತ
ವಾಗಿ ಇಲ್ಲವಾದರು!
34ನಾಶವಾಗುತ್ತಿರುವ ಜನರ ಗೋಳಾಟವನ್ನು ಕೇಳಿದ
ಇಸ್ರೇಲ್ ಜನರು, ''ಭೂಮಿಯು ನಮ್ಮನ್ನೂ ನುಂಗಿ
ಬಿಡುತ್ತದೆ!'' ಎಂದುಕೊಂಡು ನಾನಾ ದಿಕ್ಕುಗಳಿಗೆ ಓಡಿ
ಹೋದರು. 35ಅಲ್ಲದೆ ಯೆಹೋವನಿಂದ ಬೆಂಕಿಯು
ಹೊರಟುಬಂದು ಧೂಪವನ್ನು ಅರ್ಪಿಸುತ್ತಿದ್ದ ಇನ್ನೂ
ರೈವತ್ತು ಮಂದಿಯನ್ನು ದಹಿಸಿಬಿಟ್ಟಿತು.
36ಆಗ ಯೆಹೋವನು ಮೋಶೆಗೆ, 37''ಯಾಜಕನಾದ
ಆರೋನನ ಮಗ ಎಲ್ಲಾಜಾರನು ಸುಟ್ಟುಹೋದವರ
ನಡುವೆಯಿಂದ ಧೂಪಾರತಿಗಳನ್ನು ಎತ್ತಬೇಕೆಂದು
ಆಜ್ಞಾಪಿಸು ಮತ್ತು ನೀನು ಅವುಗಳಲ್ಲಿರುವ ಕೆಂಡಗಳನ್ನು
ದೂರಕ್ಕೆ ಚೆಲ್ಲು. ಯಾಕಂದರೆ ಆ ಧೂಪಾರತಿಗಳು
ಪವಿತ್ರವಾದವುಗಳು. 38ಪ್ರಾಣವನ್ನು ಕಳೆದುಕೊಂಡ ಆ
ದೋಷಿಗಳ ಧೂಪಾರತಿಗಳು ಯೆಹೋವನ ಸನ್ನಿಧಿಗೆ
ತರಲ್ಪಟ್ಟ ಕಾರಣ ಪರಿಶುದ್ಧವಾಗಿವೆ. ಆದುದರಿಂದ
ಅವುಗಳನ್ನು ತೆಗೆದು ತಗಡುಗಳಾಗಿ ಹೊಡೆದು ಯಜ್ಞ
ವೇದಿಕೆಗೆ ಮುಚ್ಚಳವನ್ನು ಮಾಡಿಸಬೇಕು. ಇದು ಇಸ್ರೇಲ
ರೆಲ್ಲರಿಗೆ ಎಚ್ಚರಿಕೆಯಾಗಿರುವುದು'' ಎಂದು ಹೇಳಿದನು.
39ಯೆಹೋವನು ಮೋಶೆಗೆ ಕೊಟ್ಟ ಅಪ್ಪಣೆಯ ಮೇರೆಗೆ
ಯಾಜಕನಾದ ಎಲ್ಲಾಜಾರನು ಸುಟ್ಟು ಹೋದವರಿಂದ
ಮೊದಲು ತರಲ್ಪಟ್ಟಿದ್ದ ಆ ತಾಮ್ರದ ಧೂಪಾರತಿಗಳನ್ನು
ತೆಗೆದುಕೊಂಡು ತಗಡುಗಳಾಗಿ ಹೊಡಿಸಿ ಯಜ್ಞವೇದಿಕೆಗೆ
ಮುಚ್ಚಳವನ್ನು ಮಾಡಿಸಿದನು. 40ಆರೋನನ ಕುಟುಂಬ
ದವನು ಮಾತ್ರ ಯೆಹೋವನ ಎದುರಿನಲ್ಲಿ ಧೂಪವನ್ನು
ಹಾಕತಕ್ಕದ್ದು ಮತ್ತು ಬೇರೆ ಯಾರಾದರೂ ಹಾಕಿದರೆ
ಅವರು ಕೋರಹ ಮತ್ತು ಅವನ ಹಿಂಬಾಲಕರಂತೆ
ಸಾಯುವರು ಎಂಬುದನ್ನು ಇಸ್ರೇಲರಿಗೆ ಆ ಮುಚ್ಚಳವು
ನೆನಪು ಮಾಡುವ ಗುರುತಾಗಿದೆ.

### ಆರೋನನು ಜನರನ್ನು ರಕ್ಷಿಸಿದ್ದು

41ಮರುದಿನ ಇಸ್ರೇಲರೆಲ್ಲರೂ ಮೋಶೆ ಆರೋನರ
ವಿರುದ್ಧ ಗುಣಗುಟ್ಟುತ್ತಾ, ''ನೀವೇ ಯೆಹೋವನ
ಜನರನ್ನು ಸಾಯಿಸಿದಿರಿ'' ಎಂದು ಹೇಳಿದರು.
42ಮೋಶೆ ಆರೋನರನ್ನು ಎದುರಿಸಲು ಜನರು
ಒಟ್ಟಾಗಿ ಸೇರಿಬಂದಿದ್ದಾಗ, ದೇವದರ್ಶನ ಗುಡಾರದ
ಕಡೆಗೆ ತಿರುಗಿ ನೋಡಲಾಗಿ, ದೇವದರ್ಶನಗುಡಾರವನ್ನು
ಮೋಡ ಮುಚ್ಚಿಕೊಂಡಿರುವುದನ್ನೂ ಯೆಹೋವನ
ಮಹಿಮೆಯು ಪ್ರತ್ಯಕ್ಷವಾಗಿರುವುದನ್ನೂ ಅವರು
ಕಂಡರು. 43ಆಗ ಮೋಶೆ ಆರೋನರು ದೇವದರ್ಶನ
ಗುಡಾರದ ಮುಂದಕ್ಕೆ ಬಂದರು.
44ಯೆಹೋವನು ಮೋಶೆಗೆ, 45''ಆ ಜನರಿಂದ
ನೀವಿಬ್ಬರೂ ದೂರಹೋಗಿರಿ. ನಾನು ಈಗ ಅವರನ್ನು
ನಾಶಮಾಡುತ್ತೇನೆ'' ಎಂದು ಹೇಳಿದನು. ಆಗ ಮೋಶೆ
ಆರೋನರು ಅಡ್ಡಬಿದ್ದರು. 46ಮೋಶೆಯು ಆರೋನ
ನಿಗೆ, ''ಯೆಹೋವನಿಗೆ ಕೋಪವುಂಟಾಗಿ ಈ ಜನರೊಳಗೆ
ಘೋರವ್ಯಾಧಿ ಪ್ರಾರಂಭವಾಗಿದೆ. ನೀನು ಧೂಪಾರತಿ
ಯನ್ನು ತೆಗೆದುಕೊಂಡು ಅದರಲ್ಲಿ ಯಜ್ಞವೇದಿಕೆಯಿಂದ
ತೆಗೆದ ಕೆಂಡಗಳನ್ನು ಇಟ್ಟು ಧೂಪಹಾಕಿ ಸಮೂಹದವರ
ಬಳಿಗೆ ಬೇಗ ಹೋಗಿ ಅವರಿಗೋಸ್ಕರ ದೋಷಪರಿ
ಹಾರವನ್ನು ಮಾಡಬೇಕು'' ಎಂದು ಹೇಳಿದನು.
47ಮೋಶೆ ಹೇಳಿದಂತೆ ಆರೋನನು ಧೂಪಾ
ರತಿಯನ್ನು ತೆಗೆದುಕೊಂಡು ಸಮೂಹದವರ ಮಧ್ಯಕ್ಕೆ
ಓಡಿ ಹೋದಾಗ, ಘೋರವ್ಯಾಧಿ ಆ ಜನರಲ್ಲಿ ಹರಡಿ

ಕೊಳ್ಳುತ್ತಾ ಇತ್ತು. ಅವನು ಧೂಪಹಾಕಿ ಜನರಿಗೋಸ್ಕರ
ದೋಷಪರಿಹಾರವನ್ನು ಮಾಡಿದನು. 48ಅವನು ಸತ್ತ
ವರಿಗೂ ಬದುಕಿರುವವರಿಗೂ ನಡುವೆ ನಿಂತುಕೊಂಡನು,
ಆಗ ಕಾಯಿಲೆ ನಿಂತುಹೋಯಿತು. 49ಕೋರಹನೂ
ಸೇರಿದಂತೆ ಆ ಕಾಯಿಲೆಯಿಂದ ಸತ್ತವರು ಹದಿನಾಲ್ಕು
ಸಾವಿರದ ಏಳುನೂರು ಮಂದಿ. 50ಕಾಯಿಲೆಯು ನಿಂತು
ಹೋದಾಗ, ಆರೋನನು ದೇವದರ್ಶನಗುಡಾರದ
ಪ್ರವೇಶದ್ವಾರದಲ್ಲಿದ್ದ ಮೋಶೆಯ ಬಳಿಗೆ ತಿರುಗಿ
ಬಂದನು.

### ಆರೋನನು ಪ್ರಧಾನಯಾಜಕನಾಗಿದ್ದಾನೆಂದು ದೇವರು ಸಾಕ್ಷೀಕರಿಸಿದ್ದು

17 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2“ಇಸ್ರೇಲರ ಸಂಗಡ ಮಾತಾಡಿ ಹೀಗೆ ಮಾಡ
ಬೇಕು. ಅವರ ಕುಲಗಳ ಪ್ರತಿಯೊಬ್ಬ ಪ್ರಧಾನನಿಂದ
ಒಂದೊಂದು ಕೋಲಿನ ಮೇರೆಗೆ ಹನ್ನೆರಡು ಕೋಲು
ಗಳನ್ನು ತೆಗೆದುಕೊಳ್ಳಬೇಕು. ಅವನವನ ಕೋಲಿನ ಮೇಲೆ
ಆಯಾ ಕುಲಪ್ರಧಾನನ ಹೆಸರನ್ನು ಬರೆಯಿಸಬೇಕು.
3ಲೇವಿ ಕುಲದ ಕೋಲಿನ ಮೇಲೆ ಆರೋನನ ಹೆಸರನ್ನು
ಬರೆಯಿಸಬೇಕು. 4ನೀನು ಆ ಕುಲಗಳನ್ನು ದೇವದರ್ಶನ
ಗುಡಾರದಲ್ಲಿ ಅಂದರೆ ನಾನು ನಿನ್ನನ್ನು ಸಂಧಿಸುವ
ಒಡಂಬಡಿಕೆ ಪೆಟ್ಟಿಗೆಯ ಮುಂದೆ ಇಡಬೇಕು. 5ನಾನು
ಒಬ್ಬನನ್ನು ನನ್ನ ಯಾಜಕನನ್ನಾಗಿ ಆರಿಸಿಕೊಳ್ಳುವೆನು;
ಅವನ ಕೋಲು ಚಿಗುರುವುದು, ಇಸ್ರೇಲ್ ಜನರು ನಿಮ್ಮ
ವಿರುದ್ಧವಾಗಿ ಹೇಳುತ್ತಿರುವ ದೂರುಗಳನ್ನು ನಾನು ಹೀಗೆ
ನಿಲ್ಲಿಸುವೆನು.”

6ಅದಕ್ಕನುಸಾರವಾಗಿ ಮೋಶೆಯು ಇಸ್ರೇಲರ ಸಂಗಡ
ಮಾತಾಡಲಾಗಿ ಅವರ ಕುಲಪ್ರಧಾನರೆಲ್ಲ ಅವನಿಗೆ, ಒಬ್ಬ
ಕುಲಪ್ರಧಾನನಿಗೆ ಒಂದು ಕೋಲಿನಂತೆ, ಹನ್ನೆರಡು
ಕೋಲುಗಳನ್ನು ಕೊಟ್ಟರು. ಅವುಗಳೊಡನೆ ಆರೋನನ
ಕೋಲೂ ಇತ್ತು. 7ಮೋಶೆ ಆ ಕೋಲುಗಳನ್ನು
ಒಡಂಬಡಿಕೆಯ ಗುಡಾರದಲ್ಲಿ ಯೆಹೋವನ ಮುಂದೆ
ಇಟ್ಟನು. 8ಮರುದಿನ ಮೋಶೆ ಗುಡಾರದೊಳಗೆ ಹೋಗಿ
ನೋಡಲಾಗಿ ಲೇವಿ ಕುಲದ ಆರೋನನ ಕೋಲು ಚಿಗುರಿ
ಮೊಗ್ಗುಬಿಟ್ಟು ಹೂವರಳಿ ಬಾದಾಮಿ ಹಣ್ಣುಗಳನ್ನು
ಫಲಿಸಿತ್ತು. 9ಮೋಶೆ ಎಲ್ಲಾ ಕೋಲುಗಳನ್ನು ಯೆಹೋವನ
ಸನ್ನಿಧಿಯಿಂದ ಹೊರಗೆ ತೆಗೆದುಕೊಂಡು ಬಂದು
ಅವುಗಳನ್ನೆಲ್ಲಾ ಇಸ್ರೇಲರಿಗೆ ತೋರಿಸಿದನು. ಪ್ರಧಾನರು
ಆ ಕೋಲುಗಳನ್ನು ನೋಡಿ, ತಮ್ಮತಮ್ಮ ಕೋಲುಗಳನ್ನು
ತೆಗೆದುಕೊಂಡರು.

10ತರುವಾಯ ಯೆಹೋವನು ಮೋಶೆಗೆ,
“ಆರೋನನ ಕೋಲನ್ನು ಮತ್ತೆ ಒಡಂಬಡಿಕೆಯ
ಪೆಟ್ಟಿಗೆಯ ಮುಂದಿಡು. ದಂಗೆಕೋರರಿಗೆ ಅದು ಎಚ್ಚರಿಕೆ
ಯಾಗಿ ಅಲ್ಲೇ ಇರಬೇಕು, ಇವರು ಇನ್ನು ಮುಂದೆ ನನಗೆ
ವಿರೋಧವಾಗಿ ಗುಣಗುಟ್ಟಿ ಮರಣಕ್ಕೆ ಗುರಿಯಾಗದಂತೆ
ನೀನು ಹೀಗೆ ಮಾಡಬೇಕು” ಎಂದು ಆಜ್ಞಾಪಿಸಿದನು.
11ಆದ್ದರಿಂದ ಯೆಹೋವನ ಅಪ್ಪಣೆಯ ಪ್ರಕಾರವೇ
ಮೋಶೆ ಮಾಡಿದನು.

12ಇಸ್ರೇಲರು ಮೋಶೆಗೆ, “ನಾವೆಲ್ಲರು ಪ್ರಾಣ ಕಳೆದು
ಕೊಂಡು ನಾಶವಾಗುತ್ತೇವಲ್ಲಾ, ನಮ್ಮಲ್ಲಿ ಯಾರೂ
ಉಳಿಯುವುದಿಲ್ಲ. 13ಯೆಹೋವನ ಗುಡಾರದ ಹತ್ತಿರಕ್ಕೆ
ಬಂದವರೆಲ್ಲರೂ ಸಾಯುತ್ತಾರಷ್ಟೆ. ನಾವೆಲ್ಲರೂ
ಹಾಗೆಯೇ ಸಾಯುತ್ತೇವೋ?” ಎಂದು ಹೇಳಿದರು.

### ಯಾಜಕರ ಮತ್ತು ಲೇವಿಯರ ಕಾರ್ಯಗಳು

18 ಯೆಹೋವನು ಆರೋನನಿಗೆ, “ಪವಿತ್ರ
ವಸ್ತುಗಳ ವಿಷಯದಲ್ಲಿ ಏನಾದರೂ ಹೊಲಸು
ತನ ನಡೆದರೆ, ನೀನೂ ನಿನ್ನ ಕುಟುಂಬದವರೂ ಅದರ
ಅಪರಾಧದ ಫಲವನ್ನು ಅನುಭವಿಸಬೇಕು. ಯಾಜಕತ್ವದ
ವಿಷಯದಲ್ಲಿ ಏನಾದರೂ ಹೊಲಸುತನ ನಡೆದರೆ, ನೀನು
ಮತ್ತು ನಿನ್ನ ಗಂಡುಮಕ್ಕಳು ಮಾತ್ರ ಅದರ ಅಪರಾಧದ
ಫಲವನ್ನು ಅನುಭವಿಸಬೇಕು. 2ನಿನ್ನ ತಂದೆಯ
ಕುಲದವರೂ ನಿನ್ನ ರಕ್ತಸಂಬಂಧಿಗಳೂ ಆಗಿರುವ ಲೇವಿ
ಕುಲದವರನ್ನು ನಿನ್ನೊಡನೆ ಸೇರಿಸಿಕೊ; ನೀನು ಮತ್ತು
ನಿನ್ನ ಗಂಡು ಮಕ್ಕಳು ಒಡಂಬಡಿಕೆಯ ಮುಂದೆ ಇರುವಾಗ
ಅವರು ನಿನ್ನೊಂದಿಗಿದ್ದು ನಿನಗೆ ಸಹಾಯ ಮಾಡುವರು.
3ಆ ಲೇವಿಯರು ನಿನಗೆ ಕಾವಲುಗಾರರಾಗಿರಬೇಕು.
ಅಂದರೆ ಇಡೀ ಗುಡಾರವನ್ನು ಕಾಯಬೇಕು. ಆದರೆ
ಅವರು ಪವಿತ್ರವಾದ ಪಾತ್ರೆಯನ್ನಾಗಲೀ ಯಜ್ಞವೇದಿ
ಕೆಯನ್ನಾಗಲೀ ಮುಟ್ಟಬಾರದು; ಮುಟ್ಟಿದರೆ ಅವರೂ
ಸಾಯುವರು ಮತ್ತು ನೀವೂ ಸಾಯುವಿರಿ. 4ಅವರು
ದೇವದರ್ಶನ ಗುಡಾರವನ್ನು ಕಾಯಬೇಕು ಮತ್ತು
ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸವನ್ನು ಮಾಡ
ಬೇಕು. ಬೇರೆ ಯಾರೂ ನಿನ್ನೊಂದಿಗೆ ಭಾಗಿಗಳಾಗಿರ
ಬಾರದು.

5“ನಾನು ಮತ್ತೆ ಕೋಪಗೊಂಡು ಇಸ್ರೇಲರನ್ನು
ದಂಡಿಸದಂತೆ ನೀವು ಪವಿತ್ರ ಸ್ಥಳವನ್ನು ಮತ್ತು ಯಜ್ಞ
ವೇದಿಕೆಯನ್ನು ಕಾಯಬೇಕು. 6ಎಲ್ಲಾ ಇಸ್ರೇಲರಿಂದ
ನಾನೇ ಲೇವಿಯರನ್ನು ಆರಿಸಿಕೊಂಡಿದ್ದೇನೆ. ಅವರು
ನಿನಗೆ ಕೊಡಲ್ಪಟ್ಟ ಬಹುಮಾನವಾಗಿದ್ದಾರೆ. ದೇವ
ದರ್ಶನ ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸವನ್ನು
ಮಾಡಲು ಅವರು ಪ್ರಭುವಿಗೆ ಪ್ರತಿಷ್ಠಿತರಾಗಿದ್ದಾರೆ.
7ಆದರೆ ಆರೋನನೇ, ನೀನೂ ನಿನ್ನ ಪುತ್ರರೂ ನಿಮ್ಮ
ಯಾಜಕತ್ವವನ್ನು ಕಾಪಾಡಿಕೊಳ್ಳಬೇಕು. ಅಯೋಗ್ಯನಾದ

ಯಾವನೂ ಯಜ್ಞವೇದಿಕೆಯ ಬಳಿ ಕೆಲಸ ಮಾಡುವುದ
ಕ್ಕಾಗಲೀ ತೆರೆಯ ಆಚೆಯಿರುವ ಮಹಾಪವಿತ್ರ ಸ್ಥಳಕ್ಕೆ
ಪ್ರವೇಶಿಸುವುದಕ್ಕಾಗಲೀ ನೀವು ಬಿಡಕೂಡದು. ನೀವು
ಸಹ ಕೆಲಸ ಮಾಡಬೇಕು. ನಾನು ನಿಮಗೆ ಅಮೂಲ್ಯವಾದ
ಯಾಜಕತ್ವವನ್ನು ಕೊಟ್ಟಿದ್ದೇನೆ. ಆದರೆ ಅಯೋಗ್ಯನಾದ
ಯಾವನಾದರೂ ಯಾಜಕತ್ವದ ಈ ಕರ್ತವ್ಯಗಳನ್ನು
ಮಾಡಲು ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡುವನು.''

8 ಆಗ ಯೆಹೋವನು ಆರೋನನಿಗೆ ಹೀಗೆ ಹೇಳಿದನು:
''ನನಗೆ ಬರಬೇಕಾಗಿರುವ ಕೊಡುಗೆಗಳನ್ನು ಮತ್ತು
ಇಸ್ರೇಲರ ಪವಿತ್ರವಾದ ಎಲ್ಲಾ ಕಾಣಿಕೆಗಳನ್ನು ಕಾಯುವ
ಜವಾಬ್ದಾರಿಕೆಯನ್ನು ನಾನೇ ನಿನಗೆ ವಹಿಸಿದ್ದೇನೆ. ಅವು
ಗಳನ್ನು ನಿನಗೂ ನಿನ್ನ ಸಂತತಿಯವರಿಗೂ ಪಾಲಾಗಿ
ಕೊಟ್ಟಿದ್ದೇನೆ. ಅವು ಯಾವಾಗಲೂ ನಿಮ್ಮವೇ. 9 ಯಜ್ಞ
ವೇದಿಕೆಯ ಬೆಂಕಿಯಲ್ಲಿ ಹೋಮಮಾಡದೆ ಉಳಿಸಿರುವ
ಮಹಾಪರಿಶುದ್ಧ ಪದಾರ್ಥಗಳಲ್ಲಿ ನಿಮಗೆ ದೊರೆಯ
ಬೇಕಾದವುಗಳು ಯಾವುವೆಂದರೆ: ಅವರು ನನಗೆ ಕೊಡ
ಲಿರುವ ಯಜ್ಞಗಳು, ಧಾನ್ಯಾರ್ಪಣೆಗಳು, ಪಾಪಪರಿ
ಹಾರಕ ಯಜ್ಞಗಳು, ದೋಷಪರಿಹಾರಕ ಯಜ್ಞಗಳು
ಮತ್ತ ಅಂತಹ ಪ್ರತಿಯೊಂದು ಅರ್ಪಣೆಗಳು ನಿನಗೂ ನಿನ್ನ
ಗಂಡುಮಕ್ಕಳಿಗೂ ಮಹಾಪವಿತ್ರವಾಗಿವೆ. 10 ನೀವು ಮಹಾ
ಪವಿತ್ರವಾದ ಸ್ಥಳದಲ್ಲಿ ಅದನ್ನು ಊಟಮಾಡಬೇಕು.
ನಿಮ್ಮಲ್ಲಿರುವ ಪುರುಷರೆಲ್ಲರೂ ಅವುಗಳನ್ನು ತಿನ್ನ
ಬಹುದು; ಅವು ಮಹಾಪವಿತ್ರವಾದವುಗಳೆಂದು ನೀವು
ಪರಿಗಣಿಸಬೇಕು.

11 ''ಅದಲ್ಲದೆ, ಅವರ ಪ್ರತಿಷ್ಠಿತಾ ಕಾಣಿಕೆಗಳು ಮತ್ತು
ಇಸ್ರೇಲರ ನಿವಾಳಿಸಲ್ಪಟ್ಟ ಕಾಣಿಕೆಗಳು ನಿಮಗೆ ಸೇರಿವೆ.
ಅವುಗಳನ್ನು ನಾನು ನಿನಗೂ ನಿನ್ನ ಗಂಡುಮಕ್ಕಳಿಗೂ
ಹೆಣ್ಣುಮಕ್ಕಳಿಗೂ ಶಾಶ್ವತವಾದ ಪಾಲಾಗಿ ಕೊಡುವೆನು.

12 ''ಇದಲ್ಲದೆ, ಇಸ್ರೇಲರು ಯೆಹೋವನಿಗೆ ಸಮರ್ಪಿ
ಸುವ ಪ್ರಥಮ ಫಲದ ಪದಾರ್ಥಗಳಲ್ಲಿ ಅಂದರೆ
ಉತ್ತಮವಾದ ಎಣ್ಣೆ, ಹೊಸ ದ್ರಾಕ್ಷಾರಸ, ಧಾನ್ಯ ಇವು
ಗಳನ್ನೆಲ್ಲ ನಾನು ನಿಮಗೆ ಕೊಡುತ್ತೇನೆ. 13 ಅವರು ತಮ್ಮ
ದೇಶದ ಎಲ್ಲಾ ಬೆಳೆಗಳಲ್ಲಿ ಯೆಹೋವನಿಗೋಸ್ಕರ ತರುವ
ಪ್ರಥಮ ಫಲವು ನಿಮಗೆ ಸಲ್ಲಬೇಕು. ನಿಮ್ಮ ಕುಟುಂಬ
ಗಳಲ್ಲಿ ಶುದ್ಧರಾಗಿರುವವರೆಲ್ಲರೂ ಅವುಗಳನ್ನು ಊಟ
ಮಾಡಬಹುದು.

14 ''ಇಸ್ರೇಲರು ಯೆಹೋವನಿಗೆ ಹರಕೆಹೊತ್ತು
ಕೊಂಡು ಕೊಡುವ ಪ್ರತಿಯೊಂದೂ ನಿಮ್ಮದಾಗಿವೆ.

15 ''ಮನುಷ್ಯರಲ್ಲಾಗಲೀ ಪ್ರಾಣಿಗಳಲ್ಲಾಗಲೀ ಅವರು
ಯೆಹೋವನಿಗೆ ಸಮರ್ಪಿಸುವ ಚೊಚ್ಚಲಾದದ್ದು ನಿನಗೆ
ಸಲ್ಲಬೇಕು. ಆದರೆ ಮನುಷ್ಯರ ಚೊಚ್ಚಲು ಮಕ್ಕಳಿಗೂ
ಅಪವಿತ್ರವಾದ ಪಶುಗಳ ಮರಿಗಳಿಗೂ ಬದಲಾಗಿ ನೀನು
ಈಡನ್ನು ತೆಗೆದುಕೊಳ್ಳಬೇಕು. 16 ಒಂದು ತಿಂಗಳಿನ
ಪ್ರಾಯಕ್ಕೆ ಬಂದಿರುವ ಎಲ್ಲರಿಂದಲೂ ನಿಗಧಿಪಡಿಸಿದ
ಐದು ಶೆಕೆಲ್‌ಗಳನ್ನು ಈಡಾಗಿ ತೆಗೆದುಕೊಳ್ಳಬೇಕು.

17 ''ಆದರೆ ಚೊಚ್ಚಲು ಆಕಳಿಗಾಗಲೀ ಕುರಿಗಾಗಲೀ
ಆಡಿಗಾಗಲೀ ಈಡನ್ನು ಕೊಡಕೂಡದು. ಆ ಪಶುಗಳು
ಪವಿತ್ರವಾಗಿವೆ. ಅವುಗಳ ರಕ್ತವನ್ನು ವೇದಿಕೆಯ ಮೇಲೆ
ಚೆಲ್ಲಿ ಅವುಗಳ ಕೊಬ್ಬನ್ನು ಯೆಹೋವನಿಗೆ ಮೆಚ್ಚಿಗೆಕರ
ವಾದ ಸುಗಂಧ ವಾಸನೆಯ ತ್ಯಾಗಮಯವಾದ
ಕಾಣಿಕೆಯನ್ನಾಗಿ ಹೋಮಮಾಡಿರಿ. 18 ಆದರೆ ಅವುಗಳ
ಮಾಂಸದಲ್ಲಿ ನಿವಾಳಿಸಲ್ಪಡುವ ಕಾಣಿಕೆಯಂತೆ ಎದೆಯ
ಭಾಗ ಮತ್ತು ಬಲತೊಡೆ ನಿಮ್ಮದಾಗಿವೆ. 19 ಇಸ್ರೇಲರು
ಯೆಹೋವನಿಗೋಸ್ಕರ ಪ್ರತ್ಯೇಕಿಸಿ ಸಮರ್ಪಿಸುವ ಪವಿತ್ರ
ವಸ್ತುಗಳೆಲ್ಲವನ್ನು ನಿನಗೂ ನಿನ್ನ ಸಂತತಿಯವರಾದ ಸ್ತ್ರೀ
ಪುರುಷರೆಲ್ಲರಿಗೂ ಶಾಶ್ವತವಾದ ಪಾಲಾಗಿ ಅನುಗ್ರಹಿಸಿ
ದ್ದೇನೆ. ಇದು ಯೆಹೋವನ ಸನ್ನಿಧಿಯಲ್ಲಿ ನಿನ್ನೊಡ
ನೆಯೂ ನಿನ್ನ ನಂತರದ ಸಂತತಿಯವರೊಡನೆಯೂ
ಮಾಡಿಕೊಂಡ ಶಾಶ್ವತವಾದ ಒಡಂಬಡಿಕೆ.''

20 ಇದಲ್ಲದೆ ಯೆಹೋವನು ಆರೋನನಿಗೆ, ''ಅವರ
ಭೂಮಿಯಲ್ಲಿ ನಿನಗೆ ಯಾವ ಪಾಲೂ ದೊರೆಯು
ವುದಿಲ್ಲ. ಅವರ ಮಧ್ಯದಲ್ಲಿ ನೀನು ಭೂಮಿಯ ಯಾವ
ಭಾಗವನ್ನೂ ಹೊಂದಿರುವುದಿಲ್ಲ. ಇಸ್ರೇಲರ ಮಧ್ಯದಲ್ಲಿ
ಯೆಹೋವನಾದ ನಾನೇ ನಿಮ್ಮ ಪಾಲೂ ಭಾಗವೂ
ಆಗಿದ್ದೇನೆ.

21 ''ಲೇವಿಯರು ದೇವದರ್ಶನಗುಡಾರಕ್ಕೋಸ್ಕರ
ಮಾಡುವ ಭಾರವಾದ ಕೆಲಸಕ್ಕೆ ಪ್ರತಿಫಲವಾಗಿ ಪ್ರತಿ
ಯೊಬ್ಬ ಇಸ್ರೇಲನ ದಶಾಂಶವನ್ನು ನಾನು ಲೇವಿಯರಿಗೆ
ಅವರ ಪಾಲಾಗಿ ಕೊಡುತ್ತಿದ್ದೇನೆ. 22 ಈಗಿನಿಂದ
ಇಸ್ರೇಲರು ದೇವದರ್ಶನಗುಡಾರದೊಳಗೆ ಅತಿಕ್ರಮಿಸಿ
ಬರುವುದಿಲ್ಲ. ಬಂದರೆ ತಮ್ಮ ಮೇಲೆ ದಂಡನೆಯನ್ನು
ಬರಮಾಡಿಕೊಂಡು ಸಾಯುವರು. 23 ದೇವದರ್ಶನ
ಗುಡಾರಕ್ಕೋಸ್ಕರ ಲೇವಿಯರು ಮಾತ್ರ ಕೆಲಸ ಮಾಡ
ಬೇಕು. ದೇವದರ್ಶನಗುಡಾರದಲ್ಲಿ ಏನಾದರೂ ಅತಿ
ಕ್ರಮಣ ನಡೆದರೆ ಇಸ್ರೇಲರ ದಂಡನೆಯನ್ನು ಅವರೇ
ಪಡೆಯುವರು. ಈಗಿನಿಂದ ಇದೇ ಶಾಶ್ವತ ಕಟ್ಟಳೆ. ಇತರ
ಇಸ್ರೇಲರಿಗೆ ನಾನು ವಾಗ್ದಾನ ಮಾಡಿದ ಭೂಮಿಯಲ್ಲಿ
ಯಾವ ಪಾಲೂ ದೊರೆಯುವುದಿಲ್ಲ. 24 ಇಸ್ರೇಲರು
ಪ್ರತ್ಯೇಕಿಸಿ ಯೆಹೋವನಿಗೆ ಸಮರ್ಪಿಸುವ ಹತ್ತನೆಯ
ಪಾಲನ್ನು ಲೇವಿಯರಿಗೆ ಸ್ವಾಸ್ಥ್ಯವಾಗಿ ಕೊಟ್ಟಿದ್ದೇನೆ.
ಇವರಿಗೆ ಇಸ್ರೇಲರೊಂದಿಗೆ ಪಾಲು ದೊರೆಯುವುದಿಲ್ಲ
ವೆಂದು ನಾನು ಲೇವಿಯರ ಕುರಿತು ಹೇಳಿದ ಮಾತಿಗೆ
ಇದೇ ಕಾರಣ'' ಎಂದು ಹೇಳಿದನು. 25 ಯೆಹೋವನು
ಮೋಶೆಗೆ ಹೇಳಿದ್ದೇನೆಂದರೆ: 26 ''ನೀನು ಲೇವಿಯರಿಗೆ

ಇದನ್ನು ತಿಳಿಸಬೇಕು; ಇಸ್ರೇಲರು ತಮ್ಮ ಆದಾಯದಲ್ಲಿ
ಕೊಡುವ ದಶಾಂಶವನ್ನು ನಿಮ್ಮ ಪಾಲೆಂದು ನಾನು ನಿಗಧಿ
ಪಡಿಸಿದ್ದೇನೆ. ಇಸ್ರೇಲರು ದಶಾಂಶ ಕೊಟ್ಟಾಗ ನೀವು ಆ
ದಶಾಂಶದಲ್ಲಿ ಹತ್ತನೆಯ ಒಂದು ಭಾಗವನ್ನು ಯೆಹೋವ
ನಿಗೆ ಸಲ್ಲಿಸಬೇಕು. 27 ನೀವು ಹೀಗೆ ಸಮರ್ಪಿಸಿದ ಹತ್ತನೆಯ
ಪಾಲು ಕಣದಲ್ಲಿನ ದವಸವನ್ನು, ದ್ರಾಕ್ಷಿ ಆಲೆಯಿಂದ
ರಸವನ್ನು ಕೊಟ್ಟಂತೆ ನಿಮ್ಮ ಲೆಕ್ಕದಲ್ಲಿ ಎಣಿಸಲ್ಪಡುವುದು.
28 ಇಸ್ರೇಲರಿಂದ ನಿಮಗೆ ಸಲ್ಲುವ ಹತ್ತನೆಯ ಪಾಲಿನಲ್ಲಿ
ನೀವು ಯೆಹೋವನಿಗೋಸ್ಕರ ಹತ್ತನೆಯ ಭಾಗವನ್ನು
ಪ್ರತ್ಯೇಕಿಸಿ ಯಾಜಕನಾದ ಆರೋನನಿಗೆ ಒಪ್ಪಿಸಬೇಕು.
29 ಇಸ್ರೇಲರು ನಿಮಗೆ ಕೊಡುವ ಸಕಲ ಪದಾರ್ಥಗಳಿಂದ
ನೀವು ಯೆಹೋವನಿಗೆ ಕೊಡಬೇಕಾಗಿರುವ ಪಾಲನ್ನು
ಪ್ರತ್ಯೇಕಿಸಿಡಬೇಕು. ಪ್ರತಿಷ್ಠಿಸಲ್ಪಟ್ಟಿರುವ ಉತ್ತಮ
ಭಾಗವನ್ನು ನೀವು ಪ್ರತ್ಯೇಕವಾಗಿಡಬೇಕು.

30 ‘‘ಮೋಶೆಯೇ, ಲೇವಿಯರಿಗೆ ಹೀಗೆ ಹೇಳು: ಆ
ಕಾಣಿಕೆಗಳಲ್ಲಿ ಉತ್ತಮವಾದ ಭಾಗವನ್ನು ನೀವು
ಯೆಹೋವನಿಗೆ ಕೊಡುವಾಗ, ಲೇವಿಯರಾದ ನಿಮಗೆ
ಅದು ಕಣದ ಉತ್ಪಾದನೆಯಂತೆಯೂ ದ್ರಾಕ್ಷಿ ಆಲೆಯ
ಉತ್ಪಾದನೆಯಂತೆಯೂ ಪರಿಗಣಿಸಲ್ಪಡುವುದು. 31 ಉಳಿ
ದದ್ದನ್ನು ನೀವು ಮತ್ತು ನಿಮ್ಮ ಕುಟುಂಬದವರು ಎಲ್ಲಿ
ಬೇಕಾದರೂ ತಿನ್ನಬಹುದು. ನೀವು ದೇವದರ್ಶನ
ಗುಡಾರದಲ್ಲಿ ಮಾಡುವ ಕೆಲಸಕ್ಕೆ ಇದು ನಿಮಗೆ ಪ್ರತಿ
ಫಲವಾಗಿದೆ. 32 ನೀವು ಯಾವಾಗಲೂ ಉತ್ತಮ
ಭಾಗವನ್ನು ಯೆಹೋವನಿಗೆ ಕೊಟ್ಟರೆ, ಸಂಕಟದ ದಂಡನೆ
ಯಿಂದ ತಪ್ಪಿಸಿಕೊಳ್ಳುವಿರಿ. ಇಸ್ರೇಲರು ಕೊಟ್ಟ ಪವಿತ್ರ
ವಾದ ಕಾಣಿಕೆಗಳಿಗೆ ನೀವು ಅಪಮಾನ ಮಾಡುವುದಿಲ್ಲ
ಮತ್ತು ನೀವು ಸಾಯುವುದಿಲ್ಲ.’’

### ಕೆಂಪು ಹಸುವಿನ ಬೂದಿ

19 ಯೆಹೋವನು ಮೋಶೆ ಮತ್ತು ಆರೋನ
ರೊಡನೆ ಮಾತಾಡಿ ಹೀಗಂದನು:
2 ‘‘ಯೆಹೋವನು ಆಜ್ಞಾಪಿಸಿದ ಸಂಪ್ರದಾಯದ ನಿಯಮ
ವಿದು. ಯಾವ ದೋಷವಿಲ್ಲದ ಕೆಂಪು ಹಸುವನ್ನು ನಿನಗೆ
ತಂದು ಕೊಡುವಂತೆ ಇಸ್ರೇಲರಿಗೆ ಹೇಳು. ಆ ಹಸುವಿನಲ್ಲಿ
ಯಾವ ಗಾಯಗಳಿರಬಾರದು ಮತ್ತು ಆ ಹಸುವು
ಎಂದಿಗೂ ನೊಗವನ್ನು ಹೊತ್ತಿರಬಾರದು. 3 ಅದನ್ನು
ಯಾಜಕನಾದ ಎಲ್ಲಾಜಾರನಿಗೆ ಒಪ್ಪಿಸಿರಿ. ಅವನು ಅದನ್ನು
ಪಾಳೆಯದ ಹೊರಗೆ ಹೊಡಿಸಿಕೊಂಡು ಹೋಗಿ ತನಗೆದು
ರಾಗಿಯೇ ಒಬ್ಬನ ಕೈಯಿಂದ ವಧೆ ಮಾಡಿಸಬೇಕು. 4 ಬಳಿಕ
ಅವನು ಅದರ ರಕ್ತದಲ್ಲಿ ಸ್ವಲ್ಪವನ್ನು ಬೆರಳಿನಿಂದ ದೇವ
ದರ್ಶನ ಗುಡಾರದ ಮುಂಭಾಗದ ಕಡೆಗೆ ಏಳು ಸಾರಿ
ಚಿಮಿಕಿಸ ಬೇಕು. 5 ಬಳಿಕ ಅವನು ಆ ಹಸುವನ್ನು ಚರ್ಮ,
ಮಾಂಸ, ರಕ್ತ ಮತ್ತು ಕಲ್ಮಶಗಳ ಸಹಿತವಾಗಿ ತನ್ನ ಎದುರಿ
ನಲ್ಲಿಯೇ ಸುಡಿಸಬೇಕು. 6 ಯಾಜಕನು ದೇವದಾರು
ಮರದ ಕಟ್ಟಿಗೆಯನ್ನೂ ಹಿಸ್ಸೋಪ್ ಗಿಡದ ಎಳೆಕೊಂಬೆ
ಯನ್ನೂ ಕೆಂಪು ದಾರವನ್ನೂ ತೆಗೆದುಕೊಂಡು ಉರಿಯು
ತ್ತಿರುವ ಆ ಹಸುವಿನ ಮೇಲೆ ಎಸೆಯಬೇಕು. 7 ಆ
ಯಾಜಕನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನ
ಮಾಡಿದ ನಂತರ ಪಾಳೆಯ ದೊಳಗೆ ಬರಬಹುದು. ಆದರೆ
ಆ ದಿನದ ಸಾಯಂಕಾಲದವರೆಗೆ ಅಶುದ್ಧನಾಗಿರಬೇಕು.
8 ಆ ಹಸುವನ್ನು ಸುಟ್ಟು ಹಾಕಿದವನು ತನ್ನ ಬಟ್ಟೆಗಳನ್ನು
ಒಗೆದುಕೊಂಡು, ಸ್ನಾನ ಮಾಡಿಕೊಳ್ಳಬೇಕು; ಅವನು
ಸಾಯಂಕಾಲದವರೆಗೆ ಅಶುದ್ಧನಾಗಿರುವನು.

9 ‘‘ಆಗ ಶುದ್ಧನಾದವನೊಬ್ಬನು ಹಸುವಿನ ಬೂದಿ
ಯನ್ನು ಕೂಡಿಸಿ ಪಾಳೆಯದ ಹೊರಗೆ ಶುದ್ಧವಾದ ಸ್ಥಳ
ದಲ್ಲಿ ಇಡಬೇಕು. ಇಸ್ರೇಲರ ಶುದ್ಧೀಕರಣದ ನೀರನ್ನು
ಸಿದ್ಧಪಡಿಸುವುದಕ್ಕಾಗಿ ಆ ಬೂದಿಯನ್ನು ಉಪಯೋಗಿಸ
ಬೇಕು. ಅದು ದೋಷಪರಿಹಾರಕವಾದದ್ದು.

10 ‘‘ಆ ಬೂದಿಯನ್ನು ಕೂಡಿಸಿದವನು ತನ್ನ ಬಟ್ಟೆಗಳನ್ನು
ಒಗೆದುಕೊಂಡು ಸಾಯಂಕಾಲದವರೆಗೆ ಅಶುದ್ಧ
ನಾಗಿರಬೇಕು.

‘‘ಇದು ಇಸ್ರೇಲರಿಗೂ ಅವರ ಮಧ್ಯದಲ್ಲಿ ಇಳಿದು
ಕೊಂಡಿರುವ ಪರದೇಶಸ್ಥರಿಗೂ ಶಾಶ್ವತ ನಿಯಮ.
11 ಯಾವನಾದರೂ ಮನುಷ್ಯ ಶವವನ್ನು ಮುಟ್ಟಿದರೆ, ಏಳು
ದಿನಗಳವರೆಗೆ ಅಶುದ್ಧನಾಗಿರುವನು. 12 ಅವನು ಶುದ್ಧೀ
ಕರಣದ ನೀರಿನಿಂದ ಮೂರನೆಯ ದಿನದಲ್ಲಿ ಮತ್ತು
ತಿರುಗಿ ಏಳನೆಯ ದಿನದಲ್ಲಿ ತನ್ನನ್ನು ಶುದ್ಧೀಕರಿಸಿಕೊಳ್ಳ
ಬೇಕು. ಆಗ ಅವನು ಶುದ್ಧನಾಗಿರುವನು. 13 ಒಬ್ಬನು
ಮನುಷ್ಯ ಶವವನ್ನು ಮುಟ್ಟಿ ತನ್ನನ್ನು ಶುದ್ಧೀ ಕರಿಸಿಕೊಳ್ಳದೆ
ಹೋದರೆ ಅವನು ಯೆಹೋವನ ಪವಿತ್ರ ಗುಡಾರವನ್ನು
ಅಶುದ್ಧಮಾಡುತ್ತಾನೆ. ಆದ್ದರಿಂದ ಆ ವ್ಯಕ್ತಿಯನ್ನು
ಇಸ್ರೇಲರಿಂದ ಬಹಿಷ್ಕರಿಸಬೇಕು. ಶುದ್ಧೀಕರಣದ ವಿಶೇಷ
ನೀರು ಅವನ ಮೇಲೆ ಚಿಮಕಿಸಲ್ಪಡದ ಕಾರಣ ಅವನು
ಅಶುದ್ಧನಾಗಿಯೇ ಇರುವನು. ಅವನ ಅಶುದ್ಧತ್ವ ಅವನಲ್ಲಿ
ನೆಲೆಸುವುದು. ಅವನು ಅಶುದ್ಧನಾಗಿಯೇ ಇರುವನು.

14 ‘‘ಯಾವನಾದರೂ ಗುಡಾರದಲ್ಲಿ ಸತ್ತರೆ ಅನುಸರಿಸ
ಬೇಕಾದ ನಿಯಮವಿದು: ಒಬ್ಬನು ಗುಡಾರದಲ್ಲಿ ಸತ್ತರೆ,
ಆ ಗುಡಾರವನ್ನು ಪ್ರವೇಶಿಸುವ ಪ್ರತಿಯೊಬ್ಬನು ಮತ್ತು
ಆ ಗುಡಾರದಲ್ಲಿರುವ ಪ್ರತಿಯೊಬ್ಬನು ಅಶುದ್ಧನಾಗು
ವನು. ಅವರು ಏಳು ದಿನಗಳವರೆಗೆ ಅಶುದ್ಧರಾಗಿರು
ವರು. 15 ಮತ್ತು ಮುಚ್ಚಳವಿಲ್ಲದಿರುವ ಪ್ರತಿಯೊಂದು
ಪಾತ್ರೆಯೂ ಅಶುದ್ಧವಾಗಿರುವುದು. 16 ಹೊರಗೆ ಹೋಗಿ
ರುವವನು ಯುದ್ಧದಲ್ಲಿ ಸತ್ತವನ ಶವವನ್ನಾಗಲೀ ಸಹಜ
ವಾಗಿ ಸತ್ತವನ ಶವವನ್ನಾಗಲೀ ಮನುಷ್ಯನ ಮೂಳೆಯ

ನ್ನಾಗಲೀ ಅಥವಾ ಸಮಾಧಿಯನ್ನಾಗಲೀ ಮುಟ್ಟಿದರೆ ಅವನು ಏಳು ದಿನಗಳವರೆಗೆ ಅಶುದ್ಧನಾಗಿರವನು.

17‘‘ಆದ್ದರಿಂದ ಅಶುದ್ಧ ವ್ಯಕ್ತಿಯನ್ನು ಶುದ್ಧೀಕರಿಸು ವುದಕ್ಕಾಗಿ ಶುದ್ಧೀಕರಣ ಯಜ್ಞದ ಬೂದಿಯಲ್ಲಿ ಸ್ವಲ್ಪ ವನ್ನು ಪಾತ್ರೆಯಲ್ಲಿ ತೆಗೆದುಕೊಂಡು ಹರಿಯುವ ನೀರನ್ನು ಅದರ ಮೇಲೆ ಸುರಿಯಬೇಕು. 18ಆಗ ಶುದ್ಧನಾಗಿರುವ ಒಬ್ಬನು ಹಿಸ್ಸೋಪ್‌ಗಿಡದ ಎಳೆಕೊಂಬೆಯನ್ನು ಆ ನೀರಿನಲ್ಲಿ ಅದ್ದಿ ಗುಡಾರದ ಮೇಲೆಯೂ ಪಾತ್ರೆಗಳ ಮೇಲೆಯೂ ಮತ್ತು ಅದರೊಳಗಿದ್ದ ವ್ಯಕ್ತಿಗಳ ಮೇಲೆಯೂ ಚಿಮಿಕಿಸಬೇಕು. ಸತ್ತವನ ದೇಹವನ್ನು ಮುಟ್ಟಿದವನಿಗೂ ಯುದ್ಧದಲ್ಲಿ ಕೊಲ್ಲಲ್ಪಟ್ಟವನ ದೇಹ ವನ್ನು ಮುಟ್ಟಿದವನಿಗೂ ಸತ್ತವನ ಮೂಳೆಗಳನ್ನು ಮುಟ್ಟಿದ ವನಿಗೂ ನೀವು ಹೀಗೆ ಮಾಡಲೇಬೇಕು.

19‘‘ಶುದ್ಧನಾಗಿರುವವನು ಮೂರನೆಯ ದಿನದ ಲ್ಲಿಯೂ ಏಳನೆಯ ದಿನದಲ್ಲಿಯೂ ಅಶುದ್ಧನಾದವನ ಮೇಲೆ ಚಿಮಿಕಿಸಬೇಕು. ಹೀಗೆ ಅವನು ಏಳನೆಯ ದಿನ ದಲ್ಲಿ ಶುದ್ಧನಾಗುವನು. ಬಳಿಕ ಅಶುದ್ದನಾದವನು ತನ್ನ ಬಟ್ಟೆಯನ್ನು ತೊಳೆದುಕೊಳ್ಳಬೇಕು.

20ಅಶುದ್ಧನಾಗಿದ್ದರೂ ತನ್ನನ್ನು ಶುದ್ಧ ಮಾಡಿಕೊಳ್ಳ ದವನು ಯೆಹೋವನ ಗುಡಾರವನ್ನು ಅಶುದ್ಧ ಮಾಡಿದವ ನಾಗಿರುತ್ತಾನೆ. ಆದ್ದರಿಂದ ಅವನನ್ನು ಇಸ್ರೇಲರಿಂದ ಬಹಿಷ್ಕರಿಸಬೇಕು. ಶುದ್ಧಪಡಿಸಿಕೊಳ್ಳುವ ನೀರನ್ನು ಚಿಮಿ ಕಿಸಿಕೊಳ್ಳದೆ ಹೋದದರಿಂದ ಅವನು ಅಶುದ್ಧನೇ.
21ಇದು ನಿಮಗೆ ಶಾಶ್ವತನಿಯಮ. ಶುದ್ಧಪಡಿಸುವ ಆ ನೀರನ್ನು ಚಿಮಿಕಿಸಿದವನು ತನ್ನ ಬಟ್ಟೆಗಳನ್ನು ಒಗೆದು ಕೊಳ್ಳಬೇಕು; ಮತ್ತು ಆ ನೀರನ್ನು ಯಾವನಾದರೂ ಮುಟ್ಟಿದರೆ, ಅವನು ಆ ದಿನದ ಸಾಯಂಕಾಲದವರೆಗೆ ಅಶುದ್ಧನಾಗಿರುವನು. 22ಅಶುದ್ಧನಾದವನು ಮುಟ್ಟು ವುದೆಲ್ಲಾ ಅಶುದ್ಧವಾಗುತ್ತದೆ. ಅಲ್ಲದೆ ಅವನನ್ನು ಮಟ್ಟು ವವನು ಆ ದಿನದ ಸಾಯಂಕಾಲದವರೆಗೆ ಅಶುದ್ಧ ನಾಗಿರುವನು.’’

## ಮಿರ್ಯಾಮಳ ಮರಣ

20 ಮೊದಲನೆಯ ತಿಂಗಳಲ್ಲಿ ಇಡೀ ಇಸ್ರೇಲ್ ಸಮು ದಾಯವು ಚಿನ್ ಮರುಭೂಮಿಗೆ ಬಂದಿತು. ಅವರು ಕಾದೇಶಿನಲ್ಲಿ ಇಳಿದುಕೊಂಡರು. ಅಲ್ಲಿ ಮಿರ್ಯಾಮಳು ಸತ್ತಳು. ಆಕೆಯ ಶವವನ್ನು ಅಲ್ಲಿ ಸಮಾಧಿ ಮಾಡಲಾಯಿತು.

## ಮೋಶೆಯ ತಪ್ಪು

2ಅಲ್ಲಿ ನೀರಿಲ್ಲದಿದ್ದ ಕಾರಣ ಅವರು ಮೋಶೆ ಆರೋನರ ವಿರುದ್ಧವಾಗಿ ಸೇರಿಬಂದರು. 3ಜನರು ಮೋಶೆಯ ಸಂಗಡ ವಾದಮಾಡಿ, ‘‘ನಮ್ಮ ಸಹೋದರರು ಯೆಹೋವನ ಸನ್ನಿಧಿಯಲ್ಲಿ ಸತ್ತಾಗ ನಾವೂ ಸತ್ತು ಹೋಗಿದ್ದರೆ ಎಷ್ಟೋ ಮೇಲಾಗಿತ್ತು. 4ಯೆಹೋವನ ಜನ ರನ್ನು ಈ ಮರುಭೂಮಿಗೆ ಯಾಕೆ ಕರೆದುಕೊಂಡು ಬಂದೆ? ನಾವು ಮತ್ತು ನಮ್ಮ ಪ್ರಾಣಿಗಳು ಇಲ್ಲಿ ಸಾಯ ಬೇಕೆಂದು ನೀನು ಇಚ್ಛೆಸುತ್ತೀಯೊ? 5ಈಜಿಪ್ಟಿನಿಂದ ನಮ್ಮನ್ನು ಇಲ್ಲಿಗೆ ಯಾಕೆ ಕರೆತಂದೆ? ಈ ಕೆಟ್ಟಸ್ಥಳಕ್ಕೆ ನಮ್ಮನ್ನು ಯಾಕೆ ಕರೆದುಕೊಂಡು ಬಂದೆ? ಇಲ್ಲಿ ಧಾನ್ಯ ವಾಗಲೀ ಅಂಜೂರವಾಗಲೀ ದ್ರಾಕ್ಷೆಯಾಗಲೀ ದಾಳಿಂಬೆ ಯಾಗಲೀ ಇಲ್ಲ, ಕುಡಿಯುವುದಕ್ಕೆ ನೀರೂ ಇಲ್ಲ’’ ಎಂದು ಹೇಳಿದರು.

6ಮೋಶೆ ಆರೋನರು ಜನಸಮೂಹದ ಎದುರಿನಿಂದ ದೇವದರ್ಶನಗುಡಾರದ ಪ್ರವೇಶದ್ವಾರಕ್ಕೆ ಹೋಗಿ ಅಡ್ಡ ಬಿದ್ದರು. ಆಗ ಯೆಹೋವನ ಮಹಿಮೆಯು ಅವರಿಗೆ ಪ್ರತ್ಯಕ್ಷವಾಯಿತು.

7ಯೆಹೋವನು ಮೋಶೆಯೊಡನೆ ಮಾತಾಡಿ, 8‘‘ಬಳಿಕ ನೀನು ಮತ್ತು ನಿನ್ನ ಸಹೋದರನಾದ ಆರೋನನು ಜನರನ್ನು ಬಂಡೆಯ ಮುಂದೆ ಸಭೆಸೇರಿಸಿ, ಜನರ ಮುಂದೆ ಆ ಬಂಡೆಗೆ ಮಾತಾಡು. ಆಗ ನೀರು ಬಂಡೆಯಿಂದ ಹರಿಯುವುದು ಮತ್ತು ನೀರನ್ನು ಜನರಿಗೂ ಅವರ ಪಶುಗಳಿಗೂ ಕೊಡು’’ ಎಂದು ಹೇಳಿದನು.

9ಕೋಲು ಪವಿತ್ರಗುಡಾರದಲ್ಲಿ ಯೆಹೋವನ ಸನ್ನಿಧಿ ಯಲ್ಲಿತ್ತು. ಯೆಹೋವನು ಹೇಳಿದಂತೆ ಮೋಶೆ ಕೋಲನ್ನು ತೆಗೆದುಕೊಂಡನು. 10ಜನರು ಬಂಡೆಯ ಮುಂದೆ ಒಟ್ಟಾಗಿ ಸೇರಿಬರಬೇಕೆಂದು ಮೋಶೆ ಆರೋನರು ಹೇಳಿದರು. ಆಗ ಮೋಶೆ, ‘‘ದಂಗೆ ಕೋರರೇ, ಈಗ ನನಗೆ ಕಿವಿಗೊಡಿರಿ. ನಿಮಗೋಸ್ಕರ ವಾಗಿ ಈ ಬಂಡೆಯಿಂದ ನೀರು ಹರಿಯುವಂತೆ ನಾವು ಮಾಡಬೇಕೊ?’’ ಎಂದು ಹೇಳಿ, 11ತನ್ನ ಕೈಯಲ್ಲಿದ್ದ ಕೋಲನ್ನು ಎತ್ತಿ ಎರಡು ಬಾರಿ ಬಂಡೆಯನ್ನು ಹೊಡೆದನು. ಬಂಡೆಯಿಂದ ನೀರು ಹರಿಯತೊಡಗಿತು. ಜನರಿಗೆ ಮತ್ತು ಪಶುಗಳಿಗೆ ಕುಡಿಯಲು ನೀರು ದೊರೆಯಿತು.

12ಆದರೆ ಯೆಹೋವನು ಮೋಶೆ ಆರೋನರಿಗೆ ಹೇಳಿ ದ್ದೇನೆಂದರೆ, ‘‘ನೀವು ನನ್ನನ್ನು ನಂಬದವರಾಗಿ ಇಸ್ರೇಲರ ಎದುರಿನಲ್ಲಿ ನನ್ನ ಪವಿತ್ರತೆಯನ್ನು ತೋರಿಸದೆ ಹೋದ ದ್ದರಿಂದ ಈ ಸಮುದಾಯದವರಿಗೆ ಕೊಡಲಿರುವ ದೇಶಕ್ಕೆ ನೀವು ಅವರನ್ನು ಕರೆದುಕೊಂಡು ಹೋಗುವುದಿಲ್ಲ.’’

13ಈ ಸ್ಥಳವು ‘‘ಮೆರೀಬಾ* ಬುಗ್ಗೆ’’ ಎಂದು ಕರೆಯಲ್ಪಟ್ಟಿತು. ಇಲ್ಲಿಯೇ ಇಸ್ರೇಲರು ಯೆಹೋವ ನೊಡನೆ ವಾದ ಮಾಡಿದರು ಮತ್ತು ಯೆಹೋವನು ತಾನು

---

**ಮೆರೀಬಾ** ಈ ಹೆಸರಿನ ಅರ್ಥ ‘‘ದೂರು ಹೇಳು.’’

ಪರಿಶುದ್ಧನು ಎಂಬುದನ್ನು ಅವರಿಗೆ ತೋರಿಸಿದ ಸ್ಥಳವು ಇದೇ.

## ಎದೋಮ್ಯರು ಇಸ್ರೇಲರನ್ನು ದಾಟಿಹೋಗಲು ಬಿಡುವುದಿಲ್ಲ

[14]ಮೋಶೆಯು ಕಾದೇಶಿನಲ್ಲಿದ್ದಾಗ ಎದೋಮಿನ
ಅರಸನ ಬಳಿಗೆ ದೂತರನ್ನು ಕಳುಹಿಸಿ, ‘‘ನಿಮ್ಮ ಸಂಬಂಧಿಕ
ರಾದ ಇಸ್ರೇಲರು ಕೇಳಿಕೊಳ್ಳುವುದೇನೆಂದರೆ: ನಮಗೆ
ಸಂಭವಿಸಿದ ಎಲ್ಲಾ ಕಷ್ಟಗಳು ನಿಮಗೆ ಗೊತ್ತಿದೆ. [15]ನಮ್ಮ
ಪೂರ್ವಿಕರು ಈಜಿಪ್ಟ್ ದೇಶಕ್ಕೆ ಇಳಿದುಹೋದದ್ದೂ
ನಾವು ಅಲ್ಲಿ ಬಹುಕಾಲ ವಾಸವಾಗಿದ್ದದ್ದೂ ಈಜಿಪ್ಟಿನವರು
ನಮಗೂ ನಮ್ಮ ಪೂರ್ವಿಕರಿಗೂ ಕ್ರೂರರಾಗಿದ್ದದ್ದೂ
ನಿಮಗೆ ತಿಳಿದದೆ. [16]ನಾವು ಯೆಹೋವನಿಗೆ ಮೊರೆಯಿಡ
ಲಾಗಿ ಆತನು ನಮ್ಮ ಪ್ರಾರ್ಥನೆಯನ್ನು ಕೇಳಿ ದೂತನನ್ನು
ಕಳುಹಿಸಿ ನಮ್ಮನ್ನು ಈಜಿಪ್ಟಿನಿಂದ ಬಿಡಿಸಿದ್ದನ್ನು ನೀವು
ಬಲ್ಲಿರಿ.

‘‘ಈಗ ನಾವು ನಿಮ್ಮ ಪ್ರದೇಶದ ಗಡಿಯಲ್ಲಿರುವ
ಕಾದೇಶೆಂಬ ಊರಲ್ಲಿದ್ದೇವೆ. [17]ನಿಮ್ಮ ದೇಶವನ್ನು ದಾಟಿ
ಹೋಗುವುದಕ್ಕೆ ನಮಗೆ ಅಪ್ಪಣೆಯಾಗಬೇಕೆಂದು ಬೇಡಿ
ಕೊಳ್ಳುತ್ತೇವೆ. ನಾವು ಹೊಲಗಳಲ್ಲಿಯಾಗಲೀ ದ್ರಾಕ್ಷಿ
ತೋಟಗಳಲ್ಲಿಯಾಗಲೀ ಹಾದುಹೋಗುವುದಿಲ್ಲ. ಬಾವಿ
ಗಳ ನೀರನ್ನು ಕುಡಿಯುವುದಿಲ್ಲ. ರಾಜಮಾರ್ಗದಲ್ಲಿಯೇ
ನಡೆದು ನಿಮ್ಮ ದೇಶದ ಮೇರೆಗಳನ್ನು ದಾಟುವ ತನಕ
ಎಡಕ್ಕಾಗಲೀ ಬಲಕ್ಕಾಗಲೀ ತಿರುಗುವುದಿಲ್ಲ’’ ಎಂದು
ಹೇಳಿಸಿದನು.

[18]ಆದರೆ ಎದೋಮಿನ ಅರಸನು, ‘‘ನಮ್ಮ ದೇಶವನ್ನು
ನೀವು ದಾಟಿಹೋಗಕೂಡದು. ದಾಟುವುದಾದರೆ, ನಾವು
ನಿಮ್ಮ ಮೇಲೆ ಯುದ್ಧಕ್ಕೆ ಬರುತ್ತೇವೆ’’ ಎಂದು ಉತ್ತರ
ಕೊಟ್ಟನು.

[19]ಅದಕ್ಕೆ ಇಸ್ರೇಲರು, ‘‘ನಾವು ರಾಜಮಾರ್ಗದಲ್ಲಿಯೇ
ಹೋಗುವೆವು. ನಾವೂ ನಮ್ಮ ಪಶುಗಳೂ ನಿಮ್ಮ ನೀರನ್ನು
ಕುಡಿದರೆ ಅದಕ್ಕೆ ಬೆಲೆ ಕೊಡುವೆವು. ನಮಗೆ ಕೇವಲ
ನಡೆದುಕೊಂಡು ಹೋಗಲು ಅನುಮತಿ ಕೊಡಿ.
ಇದೊಂದೇ ನಮ್ಮ ಚಿಕ್ಕ ಬೇಡಿಕೆ’’ ಎಂದು ಹೇಳಿದರು.

[20]ಆದರೆ ಮತ್ತೆ ಎದೋಮ್ಯರು, ‘‘ನೀವು ನಮ್ಮ ದೇಶ
ವನ್ನು ದಾಟಿಹೋಗುವುದಕ್ಕೆ ನಾವು ಬಿಡುವುದಿಲ್ಲ’’
ಎಂದು ಉತ್ತರಿಸಿದರು.

ಬಳಿಕ ಎದೋಮ್ಯರ ಅರಸನು ಬಲಿಷ್ಠವಾದ ದೊಡ್ಡ
ಸೈನ್ಯವನ್ನು ಕೂಡಿಸಿಕೊಂಡು ಇಸ್ರೇಲರ ವಿರುದ್ಧ ಯುದ್ಧ
ಮಾಡಲು ಹೊರಟನು. [21]ಇಸ್ರೇಲರು ಅವನ ದೇಶವನ್ನು
ಹಾದುಹೋಗಲು ಎದೋಮ್ಯರ ಅರಸನು ಬಿಡಲಿಲ್ಲ.
ಆಗ ಇಸ್ರೇಲರು ಬೇರೊಂದು ದಿಕ್ಕಿನಲ್ಲಿ ಹೋದರು.

## ಆರೋನನ ಮರಣ

[22]ಇಸ್ರೇಲರೆಲ್ಲರೂ ಕಾದೇಶಿನಿಂದ ಹೊರಟು
ಹೋರ್ ಬೆಟ್ಟಕ್ಕೆ ಹೋದರು. [23]ಹೋರ್ ಬೆಟ್ಟವು
ಎದೋಮ್ಯರ ಗಡಿಯ ಬಳಿಯಲ್ಲಿ ಇತ್ತು. ಯೆಹೋವನು
ಮೋಶೆ ಆರೋನರಿಗೆ, [24]‘‘ಆರೋನನು ಸತ್ತು
ಪೂರ್ವಿಕರ ಬಳಿ ಸೇರುವ ಸಮಯ ಬಂದಿದೆ. ಇಸ್ರೇಲರಿಗೆ
ನಾನು ವಾಗ್ದಾನ ಮಾಡಿದ ದೇಶದೊಳಗೆ ಆರೋನನು
ಪ್ರವೇಶಿಸುವುದಿಲ್ಲ. ಮೆರಿಬಾ ನೀರಿನ ಬಗ್ಗೆ ನಾನು ಕೊಟ್ಟ
ಆಜ್ಞೆಗೆ ವಿಧೇಯರಾಗದಿದ್ದುದರಿಂದ ನಾನು ನಿಮಗೆ
ಇದನ್ನು ಹೇಳುತ್ತಿದ್ದೇನೆ.

[25]‘‘ಈಗ ನೀನು ಮೋಶೆ ಆರೋನನನ್ನೂ ಅವನ
ಮಗನಾದ ಎಲ್ಲಾಜಾರನನ್ನೂ ಕರೆದುಕೊಂಡು ಹೋರ್
ಬೆಟ್ಟಕ್ಕೆ ಬಾ. [26]ಆರೋನನ ಪ್ರತಿಷ್ಠಿತ ವಸ್ತ್ರಗಳನ್ನು ಅವ
ನಿಂದ ತೆಗೆದು ಅವನ ಮಗನಾದ ಎಲ್ಲಾಜಾರನ ಮೇಲೆ
ಹಾಕು. ಆರೋನನು ಅಲ್ಲಿ ಬೆಟ್ಟದ ಮೇಲೆ ಸತ್ತು
ಪೂರ್ವಿಕರ ಬಳಿ ಸೇರುವನು’’ ಎಂದು ಹೇಳಿದನು.

[27]ಮೋಶೆಯು ಯೆಹೋವನ ಅಪ್ಪಣೆಗೆ ವಿಧೇಯ
ನಾದನು. ಮೋಶೆ, ಆರೋನ ಮತ್ತು ಎಲ್ಲಾಜಾರ ಇವರು
ಹೋರ್ ಬೆಟ್ಟವನ್ನು ಹತ್ತಿದರು. ಅವರು ಹೋಗುತ್ತಿರು
ವುದನ್ನು ಇಸ್ರೇಲರೆಲ್ಲರೂ ನೋಡಿದರು. [28]ಮೋಶೆಯು
ಆರೋನನ ಪ್ರತಿಷ್ಠಿತಾ ವಸ್ತ್ರಗಳನ್ನು ಅವನಿಂದ ತೆಗೆದು
ಅವನ ಮಗನಾದ ಎಲ್ಲಾಜಾರನ ಮೇಲೆ ಹಾಕಿದನು.
ಬಳಿಕ ಆರೋನನು ಬೆಟ್ಟದ ಮೇಲೆ ಸತ್ತನು. ಮೋಶೆ
ಮತ್ತು ಎಲ್ಲಾಜಾರನು ಬೆಟ್ಟದಿಂದ ಇಳಿದು ಬಂದರು.
[29]ಆರೋನನು ಸತ್ತನೆಂದು ಇಸ್ರೇಲರೆಲ್ಲರಿಗೆ ತಿಳಿಯಿತು.
ಆದ್ದರಿಂದ ಇಸ್ರೇಲಿನಲ್ಲಿ ಪ್ರತಿಯೊಬ್ಬನೂ ಆರೋನನಿ
ಗಾಗಿ ಮೂವತ್ತು ದಿನಗಳವರೆಗೆ ಶೋಕಿಸಿದನು.

## ಕಾನಾನ್ಯರೊಡನೆ ಯುದ್ಧ

21 ಕಾನಾನ್ಯನಾಗಿದ್ದ ಆರಾದಿನ ರಾಜನು ನೆಗೆವ್
ನಲ್ಲಿದ್ದುಕೊಂಡು ರಾಜ್ಯಭಾರ ಮಾಡುತ್ತಿದ್ದನು.
ಇಸ್ರೇಲರು ಅತಾರೀಮಿನ ಮಾರ್ಗವಾಗಿ ಬರುತ್ತಾರೆಂಬ
ಸುದ್ದಿಯು ಅವನಿಗೆ ಮುಟ್ಟಿತು. ಆದ್ದರಿಂದ ಅವನು
ಹೋಗಿ ಇಸ್ರೇಲರೊಡನೆ ಯುದ್ಧಮಾಡಿ ಅವರಲ್ಲಿ ಕೆಲ
ವರನ್ನು ಸೆರೆಹಿಡಿದನು. [2]ಇಸ್ರೇಲರು ಯೆಹೋವನಿಗೆ
ಹರಕೆಯನ್ನು ಮಾಡಿಕೊಂಡು, ‘‘ನಾವು ಈ ಜನರನ್ನು
ಜಯಿಸುವಂತೆ ನೀನು ಅನುಗ್ರಹಿಸಿದರೆ ನಾವು ಅವರ
ಗ್ರಾಮಗಳನ್ನು ಪೂರ್ಣವಾಗಿ ಹಾಳುಮಾಡಿ ಯೆಹೋವ
ನಿಗಾಗಿಯೇ ಬಿಟ್ಟುಬಿಡುತ್ತೇವೆ’’ ಅಂದರು.

[3]ಯೆಹೋವನು ಅವರ ಪ್ರಾರ್ಥನೆಯನ್ನು ಕೇಳಿ
ಕಾನಾನ್ಯರನ್ನು ಜಯಿಸಲು ಸಹಾಯಮಾಡಿದ್ದರಿಂದ
ಅವರು ಕಾನಾನ್ಯರನ್ನೂ ಅವರ ಗ್ರಾಮಗಳನ್ನೂ

ಸಂಪೂರ್ಣವಾಗಿ ನಾಶಮಾಡಿಬಿಟ್ಟರು. ಆದುದರಿಂದ ಆ ಪ್ರದೇಶಕ್ಕೆ ಹೊರ್ಮಾ* ಎಂದು ಹೆಸರಾಯಿತು.

### ತಾಮ್ರದ ಸರ್ಪ

[4]ಇಸ್ರೇಲರು ಹೋರ್ ಬೆಟ್ಟದಿಂದ ಹೊರಟು ಕೆಂಪು ಸಮುದ್ರದ ಮಾರ್ಗವಾಗಿ ಪ್ರಯಾಣಮಾಡಿದರು. ಅವರು ಎದೋಮ್ ದೇಶವನ್ನು ಸುತ್ತಿಕೊಂಡು ಹೋಗುವುದಕ್ಕೆ ಹೀಗೆ ಮಾಡಿದರು. ಜನರು ಮಾರ್ಗದಲ್ಲಿ ತಾಳ್ಮೆ ತಪ್ಪಿದರು. [5]ಆಗ ಅವರು ದೇವರಿಗೂ ಮೋಶೆಗೂ ವಿರೋಧವಾಗಿ ಮಾತಾಡುತ್ತಾ ''ಈ ಮರುಭೂಮಿಯಲ್ಲಿ ಸಾಯಲೆಂದು ನಮ್ಮನ್ನು ಈಜಿಪ್ಟಿನಿಂದ ಯಾಕೆ ಬರಮಾಡಿದೆ? ಇಲ್ಲಿ ಆಹಾರವೂ ಇಲ್ಲ, ನೀರೂ ಇಲ್ಲ. ಈ ನಿಸ್ಸಾರವಾದ ಆಹಾರವನ್ನು ತಿಂದು ನಮಗೆ ಬೇಸರವಾಯಿತು'' ಎಂದು ಹೇಳಿದರು.

[6]ಆದುದರಿಂದ ಯೆಹೋವನು ಅವರ ಮಧ್ಯದಲ್ಲಿ ವಿಷಕರವಾದ ಹಾವುಗಳನ್ನು ಕಳುಹಿಸಿದನು. ಅವುಗಳು ಅವರನ್ನು ಕಚ್ಚಿದ್ದರಿಂದ ಅನೇಕ ಇಸ್ರೇಲರು ಸತ್ತರು. [7]ಆಗ ಜನರು ಮೋಶೆಯ ಬಳಿಗೆ ಬಂದು, ''ನಾವು ನಿನಗೂ ಯೆಹೋವನಿಗೂ ವಿರೋಧವಾಗಿ ಮಾತಾಡಿ ಪಾಪ ಮಾಡಿದ್ದೇವೆ. ಈ ಸರ್ಪಗಳನ್ನು ನಮ್ಮಿಂದ ತೊಲಗಿ ಹೋಗುವಂತೆ ಪ್ರಾರ್ಥನೆ ಮಾಡು'' ಎಂದು ಬೇಡಿಕೊಂಡರು. ಮೋಶೆ ಜನರಿಗೋಸ್ಕರ ಪ್ರಾರ್ಥಿಸಿದನು.

[8]ಯೆಹೋವನು ಮೋಶೆಗೆ, ''ನೀನು ತಾಮ್ರದಿಂದ ವಿಷಸರ್ಪದ ಆಕಾರವನ್ನು ಮಾಡಿಸಿ ಧ್ವಜಸ್ತಂಭದ ಮೇಲೆ ಎತ್ತಿ ನಿಲ್ಲಿಸಬೇಕು, ಸರ್ಪಗಳಿಂದ ಕಚ್ಚಿಸಿಕೊಂಡವನು ಅದನ್ನು ನೋಡಿದರೆ ಬದುಕಿಕೊಳ್ಳುವನು'' ಎಂದು ಆಜ್ಞಾಪಿಸಿದನು. [9]ಆದುದರಿಂದ ಮೋಶೆ ತಾಮ್ರದಿಂದ ಸರ್ಪದ ಆಕಾರವನ್ನು ಮಾಡಿಸಿ ಧ್ವಜಸ್ತಂಭದ ಮೇಲೆ ಇಡಿಸಿದನು. ಸರ್ಪಗಳಿಂದ ಕಚ್ಚಿಸಿಕೊಂಡಿದ್ದವನು ಆ ತಾಮ್ರದ ಸರ್ಪವನ್ನು ನೋಡಿ ಬದುಕಿಕೊಂಡನು.

### ಹೋರ್ ಬೆಟ್ಟದಿಂದ ಮೋವಾಬಿಗೆ

[10]ಇಸ್ರೇಲರು ಪ್ರಯಾಣವನ್ನು ಮುಂದುವರಿಸಿ ಓಬೋತ್ ಎಂಬ ಸ್ಥಳದಲ್ಲಿ ಇಳಿದುಕೊಂಡರು. [11]ಬಳಿಕ ಅವರು ಓಬೋತಿನಿಂದ ಇಯ್ಯೇ ಅಬಾರೀಮಿಗೆ ಹೋದರು. ಇದು ಮೋವಾಬಿನ ಪೂರ್ವದಲ್ಲಿರುವ ಮರುಭೂಮಿಯ ಪ್ರದೇಶದಲ್ಲಿತ್ತು. [12]ಬಳಿಕ ಜನರು ಅಲ್ಲಿಂದ ಹೊರಟು ಜೆರೆದ್ ಕಣಿವೆಗೆ ಪ್ರಯಾಣ ಮಾಡಿದರು. ಅವರು ಅಲ್ಲಿ ಇಳಿದುಕೊಂಡರು. [13]ಅವರು ಅಲ್ಲಿಂದ ಹೊರಟು ಅರ್ನೋನ್ ಹೊಳೆಯ ಆಚೆ ಕಡೆಯಲ್ಲಿ ಅಂದರೆ ಅಮೋರಿಯರ ಪ್ರದೇಶದೊಳಗೆ ವಿಸ್ತರಿಸಿರುವ ಮರುಭೂಮಿಯಲ್ಲಿ ಪಾಳೆಯ ಮಾಡಿಕೊಂಡರು. ಅರ್ನೋನ್ ನದಿಯು ಮೋವಾಬ್ಯರಿಗೂ ಅಮೋರಿಯರಿಗೂ ಗಡಿಯಾಗಿದೆ. [14]ಅದಕ್ಕನುಸಾರವಾಗಿ ''ಯೆಹೋವನ ಯುದ್ಧಗಳು'' ಎಂಬ ಗ್ರಂಥದಲ್ಲಿ,

> ''ಸೂಫದಲ್ಲಿರುವ ವಾಹೇಬನ್ನು, ಅರ್ನೋನ್
> ಹೊಳೆಗೆ ಕೂಡುವ ಕಣಿವೆಗಳನ್ನು ಮತ್ತು [15]ಆರ್
> ವಸತಿ ಪ್ರದೇಶಕ್ಕೆ ನಡೆಸುವ ಮೋವಾಬಿನ ಗಡಿಯ
> ಉದ್ದಕ್ಕೂ ಇರುವ ಕಣಿವೆಗಳನ್ನು ದಾಟಿ
> ದ್ದಾಯಿತು'' ಎಂದು ಬರೆದಿದೆ.

[16]ಅಲ್ಲಿಂದ ಅವರು ಬೇರ್ ಎಂಬ ಸ್ಥಳಕ್ಕೆ ಬಂದರು. ''ಜನರನ್ನು ಕೂಡಿಸಿಕೋ, ನಾನು ಅವರಿಗೆ ನೀರನ್ನು ಕೊಡುವೆನು'' ಎಂದು ಯೆಹೋವನು ಮೋಶೆಗೆ ಹೇಳಿದ್ದು ಈ ಬಾವಿಯ ಸ್ಥಳದಲ್ಲೇ. [17]ಆಗ ಇಸ್ರೇಲರು ಈ ಹಾಡನ್ನು ಹಾಡಿದರು,

> ''ಬಾವಿಯೇ, ಉಕ್ಕುತ್ತಾ ಬಾ! ಜನರೇ, ಅದರ
> ಕುರಿತು ಹಾಡಿ!
> 18 ಪ್ರಧಾನರು ಈ ಬಾವಿಯನ್ನು ತೋಡಿದರು.
> ಪ್ರಮುಖ ನಾಯಕರು ಈ ಬಾವಿಯನ್ನು
> ತೋಡಿದರು. ಅವರು ತಮ್ಮ ದೊಣ್ಣೆಗಳಿಂದ
> ಮತ್ತು ಕೋಲುಗಳಿಂದ ಈ ಬಾವಿಯನ್ನು
> ಅಗೆದರು.''

ಆಮೇಲೆ ಜನರು ''ಮತ್ತಾನ'' ಎಂಬ ಮರುಭೂಮಿಯಿಂದ ಹೊರಟರು. [19]ಬಳಿಕ ಅವರು ಮತ್ತಾನದಿಂದ ನಹಲೀಯೇಲಿಗೆ ಪ್ರಯಾಣಮಾಡಿದರು. ಬಳಿಕ ಅವರು ನಹಲೀಯೇಲಿನಿಂದ ಬಾಮೋತಿಗೆ ಪ್ರಯಾಣ ಮಾಡಿದರು. [20]ಜನರು ಬಾಮೋತಿನಿಂದ ಮೋವಾಬ್ಯರ ಪ್ರದೇಶದ ಕಣಿವೆಗೆ ಪ್ರಯಾಣ ಮಾಡಿದರು. ಪಿಸ್ಗಾ ಬೆಟ್ಟದ ತುದಿಯ ಸಮೀಪದಲ್ಲಿ ನಿಂತುಕೊಂಡರೆ ಮರುಭೂಮಿಯು ಕಾಣುವುದು.

### ಸೀಹೋನ್ ಮತ್ತು ಓಗ್

[21]ಇಸ್ರೇಲರು ಸಂದೇಶಕರನ್ನು ಅಮೋರಿಯರ ಅರಸನಾದ ಸೀಹೋನನ ಬಳಿಗೆ ಕಳುಹಿಸಿದರು. ಅವರು ಅರಸನಿಗೆ, [22]''ನಿನ್ನ ದೇಶವನ್ನು ಹಾದುಹೋಗುವುದಕ್ಕೆ ನಮಗೆ ಅಪ್ಪಣೆಕೊಡು. ನಿಮ್ಮ ಹೊಲಗಳಿಗಾಗಲೀ ದ್ರಾಕ್ಷಿತೋಟಗಳಿಗಾಗಲೀ ನಾವು ತಿರುಗಿಕೊಳ್ಳುವುದಿಲ್ಲ. ನಿನ್ನ

---

**ಹೊರ್ಮಾ** ಇದರರ್ಥ ''ನಾಶನ'' ಅಥವಾ ''ಸಂಪೂರ್ಣವಾಗಿ ನಾಶವಾದರು.''

ಯಾವ ಬಾವಿಗಳಿಂದಲೂ ನಾವು ನೀರು
ಕುಡಿಯುವುದಿಲ್ಲ. ನಾವು ನಿನ್ನ ದೇಶವನ್ನು ದಾಟಿ
ಹೋಗುವ ತನಕ ಮುಖ್ಯ ದಾರಿಯಲ್ಲೇ ಪ್ರಯಾಣ
ಮಾಡುತ್ತೇವೆ'' ಎಂದು ಹೇಳಿದರು.
23ಆದರೆ ಅರಸನಾದ ಸೀಹೋನನು ಇಸ್ರೇಲರಿಗೆ ತನ್ನ
ದೇಶದ ಮೂಲಕ ಹಾದುಹೋಗಲು ಬಿಡಲಿಲ್ಲ.
ಅರಸನು ತನ್ನ ಇಡೀ ಸೈನ್ಯವನ್ನು ಕೂಡಿಸಿಕೊಂಡು
ಇಸ್ರೇಲರ ವಿರುದ್ಧ ಯುದ್ಧಮಾಡಲು ಮರುಭೂಮಿಯ
ಕಡೆಗೆ ಹೊರಟನು. ಅವನು ಯಹಜ್ ಎಂಬಲ್ಲಿಗೆ
ಬಂದನು; ಅಲ್ಲಿ ರಾಜನ ಸೈನ್ಯವು ಇಸ್ರೇಲರಿಗೆ ವಿರೋಧ
ವಾಗಿ ಯುದ್ಧಮಾಡಿತು.
24ಆದರೆ ಇಸ್ರೇಲರು ಅರಸನನ್ನು ಕೊಂದುಹಾಕಿದರು.
ಬಳಿಕ ಅವರು ಅರ್ನೋನ್ ನದಿಯಿಂದ ಹಿಡಿದು
ಯಬ್ಬೋಕ್ ನದಿಯವರೆಗಿರುವ ಅವನ ಭೂಮಿಯನ್ನು
ವಶಪಡಿಸಿಕೊಂಡರು. ಅವರು ಅಮ್ಮೋನಿಯರ ಮೇರೆ
ಯವರೆಗಿರುವ ಪ್ರದೇಶವನ್ನೆಲ್ಲಾ ವಶಪಡಿಸಿಕೊಂಡರು.
ಅಮ್ಮೋನಿಯರು ತಮ್ಮ ಗಡಿಯನ್ನು ಭದ್ರವಾಗಿ
ರಕ್ಷಿಸಿಕೊಂಡದ್ದರಿಂದ ಇಸ್ರೇಲರು ಮುಂದಕ್ಕೆ ಹೋಗ
ಲಿಲ್ಲ. 25ಇಸ್ರೇಲರು ಅಮೋರಿಯರ ಈ ಪಟ್ಟಣ
ಗಳನ್ನೆಲ್ಲಾ ವಶಪಡಿಸಿಕೊಂಡು ಅವುಗಳಲ್ಲಿ ವಾಸಿಸಿದರು.
ಅವರು ಹಷ್ಬೋನನ್ನು ಮತ್ತು ಅದರ ಸುತ್ತಲಿರುವ ಎಲ್ಲಾ
ಚಿಕ್ಕ ಪಟ್ಟಣಗಳನ್ನು ಸಹ ವಶಪಡಿಸಿಕೊಂಡರು.
26ಹೆಷ್ಬೋನಿನಲ್ಲಿ ಅಮೋರಿಯರ ಅರಸನಾದ
ಸೀಹೋನನು ವಾಸಿಸುತ್ತಿದ್ದನು. ಸೀಹೋನನು ಮೊದ
ಲಿನ ಮೋವಾಬ್ಯರ ಅರಸನೊಡನೆ ಯುದ್ಧಮಾಡಿದ್ದನು.
ಸೀಹೋನನು ಅರ್ನೋನ್ ನದಿಯವರೆಗಿರುವ ಆ
ರಾಜನ ಪ್ರದೇಶವನ್ನೆಲ್ಲ ವಶಪಡಿಸಿಕೊಂಡಿದ್ದನು. 27ಆದ
ಕಾರಣ ಹಾಡುವವರು ಈ ಗೀತೆಯನ್ನು ಹಾಡುತ್ತಾರೆ:

''ಹೆಷ್ಬೋನೇ, ಬಾ! ಮತ್ತೆ ಅದನ್ನು ನಿರ್ಮಿಸು!
ಸೀಹೋನನ ಪಟ್ಟಣವನ್ನು ಮತ್ತೆ ಸ್ಥಾಪಿಸಿರಿ.''
28 ಹೆಷ್ಬೋನಿನಲ್ಲಿ ಬೆಂಕಿಯುಂಟಾಯಿತು. ಆ ಬೆಂಕಿ
ಸೀಹೋನ ಪಟ್ಟಣದಲ್ಲಿ ಉಂಟಾಯಿತು. ಆ
ಬೆಂಕಿಯು ಮೋವಾಬಿನಲ್ಲಿರುವ 'ಆರ್' ಪಟ್ಟಣ
ವನ್ನು ನಾಶಮಾಡಿತು. ಅದು ಅರ್ನೋನ್
ನದಿಯ ಬಳಿಯಲ್ಲಿರುವ ಬೆಟ್ಟಗಳನ್ನು ಸುಟ್ಟು
ಹಾಕಿತು.
29 ಮೋವಾಬೇ, ಇದು ನಿನಗೆ ಕೆಟ್ಟದ್ದಾಗಿದೆ.
ಕೆಮೋಷಿನ ಜನರೇ, ನೀವು ನಾಶವಾದಿರಿ. ಅವನ
ಪುತ್ರರು ಓಡಿಹೋದರು. ಅಮೋರಿಯ ರಾಜ
ನಾದ ಸೀಹೋನನು ಅವನ ಪುತ್ರಿಯರನ್ನು ಸೆರೆ
ಒಯ್ದನು.
30 ಆದರೆ ನಾವು ಆ ಅಮೋರಿಯರನ್ನು ಸೋಲಿ
ಸಿದೆವು. ಹೆಷ್ಬೋನಿನಿಂದ ದೀಬೋನಿನವ
ರೆಗಿರುವ ಅವರ ಪಟ್ಟಣಗಳನ್ನೂ ನಾಶೀಮಿ ನಿಂದ
ನೋಫಹದ (ಮೇದೆಬಾದ ಹತ್ತಿರ) ವರೆಗಿರುವ
ಪಟ್ಟಣಗಳನ್ನೂ ನಾವು ನಾಶ ಮಾಡಿದೆವು.''

31ಹೀಗೆ ಇಸ್ರೇಲರು ಅಮೋರಿಯರ ದೇಶದಲ್ಲಿ ತಮ್ಮ
ಪಾಳೆಯ ಹಾಕಿದರು. 32ಮೋಶೆಯು ಯಗ್ಜೇರ್
ಪಟ್ಟಣದ ಗುಟ್ಟನ್ನು ತಿಳಿದುಕೊಂಡು ಬರುವುದಕ್ಕೆ ಕೆಲವು
ಜನರನ್ನು ಕಳುಹಿಸಿದ ನಂತರ, ಇಸ್ರೇಲರು ಆ ಪಟ್ಟಣ
ವನ್ನು ವಶಪಡಿಸಿಕೊಂಡರು. ಅದರ ಸುತ್ತಲಿರುವ ಚಿಕ್ಕ
ಪಟ್ಟಣಗಳನ್ನು ಅವರು ವಶಪಡಿಸಿಕೊಂಡರು. ಇಸ್ರೇಲರು
ಅಲ್ಲಿದ್ದ ಅಮೋರಿಯರನ್ನು ಓಡಿಸಿದರು.
33ಬಳಿಕ ಇಸ್ರೇಲರು ಬೇರೆ ದಿಕ್ಕಿಗೆ ತಿರುಗಿ ಬಾಷಾನಿನ
ಮಾರ್ಗವಾಗಿ ಪ್ರಯಾಣಮಾಡಿದರು. ಆಗ ಬಾಷಾನಿನ
ಅರಸನಾದ ಓಗನು ಎದ್ರೈ ಎಂಬಲ್ಲಿ ಇಸ್ರೇಲರೊಂದಿಗೆ
ಯುದ್ಧಮಾಡಲು ತನ್ನ ಸೈನ್ಯ ಸಮೇತವಾಗಿ ಬಂದನು.
34ಆದರೆ ಯೆಹೋವನು ಮೋಶೆಗೆ, ''ಆ ಅರಸನಿಗೆ ಹೆದರ
ಬೇಡ. ನೀನು ಅವನನ್ನು ಸೋಲಿಸುವಂತೆ ಮಾಡುವೆನು.
ನೀನು ಅವನ ಸೈನ್ಯವನ್ನು ಮತ್ತು ಅವನ ದೇಶವನ್ನು
ಪೂರ್ಣವಾಗಿ ವಶಪಡಿಸಿಕೊಳ್ಳುವೆ. ಹೆಷ್ಬೋನಿನಲ್ಲಿ
ವಾಸಿಸಿದ್ದ ಅಮೋರಿಯರ ಅರಸನಾದ ಸೀಹೋನನಿಗೆ
ಮಾಡಿದಂತೆ ಇವನಿಗೂ ಸಹ ಮಾಡುವಿರಿ'' ಅಂದನು.
35ಇಸ್ರೇಲರು ಓಗನನ್ನೂ ಅವನ ಸೈನ್ಯವನ್ನೂ ಸೋಲಿ
ಸಿದರು. ಅವರು ಅವನನ್ನೂ ಅವನ ಪುತ್ರರನ್ನೂ ಕೊಂದು
ಹಾಕಿ ಅವನ ಸೈನ್ಯವನ್ನೆಲ್ಲಾ ನಾಶಮಾಡಿದರು. ಯಾರನ್ನೂ
ಜೀವಂತವಾಗಿ ಉಳಿಸಲಿಲ್ಲ. ಇಸ್ರೇಲರು ಅವನ ದೇಶ
ವನ್ನು ವಶಪಡಿಸಿಕೊಂಡರು.

## ಬಿಳಾಮನೂ ಮೋವಾಬ್ಯರ ಅರಸನೂ

22 ಬಳಿಕ ಇಸ್ರೇಲರು ಹೊರಟು ಯೆರಿಕೋ
ಪಟ್ಟಣದ ಎದುರಾಗಿದ್ದ ಯೊರ್ದನ್ ನದಿಯ
ಆಚೆಕಡೆಯಲ್ಲಿರುವ ಮೋವಾಬ್ಯರ ಬಯಲುಗಳಲ್ಲಿ
ಪಾಳೆಯ ಮಾಡಿಕೊಂಡರು. 2ಚಿಪ್ಪೋರನ ಮಗನಾದ
ಬಾಲಾಕನು ಮೋವಾಬ್ಯರ ಅರಸನಾಗಿದ್ದನು. ಇಸ್ರೇಲರು
ಅಮೋರಿಯರಿಗೆ ಮಾಡಿದ್ದೆಲ್ಲವನ್ನು ಅವನು ಕಂಡಿದ್ದನು.
3ಮೋವಾಬ್ಯರು ನಿಜವಾಗಿಯೂ ಬಹಳ ಭಯಗೊಂಡಿ
ದ್ದರು. ಯಾಕೆಂದರೆ ಇಸ್ರೇಲರು ಬಹುಸಂಖ್ಯಾತ
ರಾಗಿದ್ದರು. 4ಮೋವಾಬ್ಯರು ಮಿದ್ಯಾನ್ಯರ ಹಿರಿಯರಿಗೆ,
''ಈ ಜನಸಮೂಹವು ನಮ್ಮನ್ನೂ ನಮ್ಮ ಸುತ್ತಲಿರುವ
ಎಲ್ಲವನ್ನೂ ಹೋರಿಯಂತೆ ನಾಶ ಮಾಡುವುದು'' ಎಂದು
ಹೇಳಿದನು.

ಮೋವಾಬ್ಯರ ಅರಸನೂ ಚಿಪ್ಪೋರನ ಮಗನೂ ಆದ
ಬಾಲಾಕನು 5ಬೆಯೋರನ ಮಗನಾದ ಬಿಳಾಮನನ್ನು
ಕರೆಸುವುದಕ್ಕೆ ಕೆಲವು ಸಂದೇಶಕರನ್ನು ಕಳುಹಿಸಿದನು.
ಬಿಳಾಮನು ಯೂಫ್ರೆಟೀಸ್ ನದಿಯ ಬಳಿ ''ಪೆತೋರ್''
ಎಂಬ ಸ್ಥಳದಲ್ಲಿದ್ದನು. ಬಿಳಾಮನ ಜನರು ಇಲ್ಲಿ ವಾಸಿಸು
ತ್ತಿದ್ದರು. ಬಾಲಾಕನು ತನ್ನ ಸಂದೇಶಕರನ್ನು ಕಳುಹಿಸಿ
ಬಿಳಾಮನಿಗೆ, ''ಒಂದು ಜನಾಂಗವು ಈಜಿಪ್ಟಿನಿಂದ
ಬಂದಿದೆ. ಅವರು ನೆಲವನ್ನೆಲ್ಲಾ ಮುಚ್ಚಿಕೊಂಡು ನನ್ನ
ಪಕ್ಕದಲ್ಲಿ ನೆಲೆಸಿದ್ದಾರೆ. ಅವರು ನಮಗಿಂತ ಬಲಿಷ್ಠರು.
6ಆದುದರಿಂದ ನೀನು ದಯಮಾಡಿ ಬಂದು ನನ
ಗೋಸ್ಕರ ಈ ಜನಕ್ಕೆ ಶಾಪಕೊಡಬೇಕು, ಯಾಕಂದರೆ
ಅವರು ನನಗಿಂತ ಬಲಿಷ್ಠರಾಗಿದ್ದಾರೆ. ನೀನು ಶಪಿಸಿದರೆ
ಆಗ ನಾನು ಅವರನ್ನು ಸೋಲಿಸಿ ಈ ದೇಶದಿಂದ ಓಡಿಸಲು
ನನಗೆ ಸಾಧ್ಯವಾಗುವುದು. ನೀನು ಯಾವನನ್ನು ಆಶೀರ್ವ
ದಿಸುವಿಯೋ ಅವನು ಯಶಸ್ವಿಯಾಗುವನೆಂದೂ ನೀನು
ಯಾವನನ್ನು ಶಪಿಸುವೆಯೋ ಅವನಿಗೆ ಸೋಲಾಗುವು
ದೆಂದೂ ನನಗೆ ಗೊತ್ತಿದೆ'' ಎಂದು ಹೇಳಿದನು.
7ಮೋವಾಬ್ಯರ ಹಿರಿಯರು ಮತ್ತು ಮಿದ್ಯಾನ್ಯರ
ಹಿರಿಯರು ಬಿಳಾಮನ ಸೇವೆಗೋಸ್ಕರ ಹಣಕೊಡಲು
ಹಣವನ್ನು ತೆಗೆದುಕೊಂಡು ಹೊರಟು ಅವನ ಬಳಿಗೆ
ಬಂದು ಬಾಲಾಕನ ಮಾತುಗಳನ್ನು ತಿಳಿಸಿದರು.

8ಬಿಳಾಮನು, ''ಈ ರಾತ್ರಿ ನೀವು ಇಲ್ಲೇ ಇಳಿದು
ಕೊಳ್ಳಿರಿ. ಯೆಹೋವನು ನನಗೆ ಹೇಳುವ ಮಾತನ್ನು
ಬೆಳಿಗ್ಗೆ ನಿಮಗೆ ತಿಳಿಸುವೆನು'' ಎಂದು ಹೇಳಿದನು.

ಆದ್ದರಿಂದ ಮೋವಾಬ್ಯರ ಹಿರಿಯರು ಆ ರಾತ್ರಿ
ಬಿಳಾಮನ ಮನೆಯಲ್ಲಿ ಇಳಿದುಕೊಂಡರು.

9ದೇವರು ಬಿಳಾಮನ ಬಳಿಗೆ ಬಂದು, ''ನಿನ್ನ
ಬಳಿಯಲ್ಲಿರುವ ಈ ಮನುಷ್ಯರು ಯಾರು?'' ಎಂದು
ಕೇಳಿದನು.

10ಬಿಳಾಮನು ದೇವರಿಗೆ, ''ಮೋವಾಬ್ಯರ ಅರಸನು
ಅಂದರೆ ಚಿಪ್ಪೋರನ ಮಗನಾದ ಬಾಲಾಕನು ನನ್ನ ಬಳಿಗೆ
ದೂತರನ್ನು ಕಳುಹಿಸಿ, 11ಒಂದು ಜನಾಂಗವು ಈಜಿಪ್ಟಿ
ನಿಂದ ಹೊರಟು ಬಂದಿದೆ ಮತ್ತು ಅವರು ದೇಶವನ್ನೆಲ್ಲಾ
ಮುಚ್ಚಿಕೊಂಡಿದ್ದಾರೆ. ಈಗ ನೀನು ಬಂದು ನನಗೋಸ್ಕರ
ಅವರನ್ನು ಶಪಿಸು. ನೀನು ಶಪಿಸಿದರೆ, ನಾನು ಅವರನ್ನು
ಸೋಲಿಸಲು ಮತ್ತು ಓಡಿಸಲು ಸಾಧ್ಯವಾಗುತ್ತದೆ
ಎಂಬುದಾಗಿ ಹೇಳಿ ಕಳುಹಿಸಿದ್ದಾನೆ'' ಎಂದು ಉತ್ತರ
ಕೊಟ್ಟನು.

12ಅದಕ್ಕೆ ದೇವರು ಬಿಳಾಮನಿಗೆ, ''ನೀನು ಅವರ
ಜೊತೆಯಲ್ಲಿ ಹೋಗಬಾರದು, ಆ ಜನರಿಗೆ ಶಾಪಕೊಡ
ಬಾರದು. ನಾನು ಅವರನ್ನು ಆಶೀರ್ವದಿಸಿದ್ದೇನೆ'' ಎಂದು
ಹೇಳಿದನು.

13ಮರುದಿನ ಬೆಳಿಗ್ಗೆ ಬಿಳಾಮನು ಎದ್ದು ಬಾಲಾಕನ
ಹಿರಿಯರಿಗೆ, ''ನಿಮ್ಮ ಸ್ವಂತ ದೇಶಕ್ಕೆ ಹಿಂದಕ್ಕೆ ಹೋಗಿರಿ.
ನಿಮ್ಮ ಸಂಗಡ ಬರಲು ಯೆಹೋವನು ನನಗೆ ಅಪ್ಪಣೆ
ಕೊಡುತ್ತಿಲ್ಲ'' ಎಂದು ಹೇಳಿದನು.

14ಮೋವಾಬ್ಯರ ನಾಯಕರು ಬಾಲಾಕನ ಬಳಿಗೆ
ಹಿಂತಿರುಗಿ, ''ಬಿಳಾಮನು ನಮ್ಮೊಡನೆ ಬರಲು ಒಪ್ಪು
ತ್ತಿಲ್ಲ'' ಎಂದು ತಿಳಿಸಿದರು.

15ಆದ್ದರಿಂದ ಬಾಲಾಕನು ಅವರಿಗಿಂತಲೂ ಶ್ರೇಷ್ಠ
ರಾದ ಅನೇಕ ನಾಯಕರನ್ನು ಕಳುಹಿಸಿದನು. 16ಇವರು
ಬಿಳಾಮನ ಬಳಿಗೆ ಬಂದು ಅವನಿಗೆ, ''ಚಿಪ್ಪೋರನ ಮಗ
ನಾದ ಬಾಲಾಕನು ಹೀಗನ್ನುತ್ತಾನೆ: ನೀನು ನನ್ನ ಬಳಿಗೆ
ಬರಲು ಅಡ್ಡಿಮಾಡುವ ಯಾವುದಕ್ಕೂ ಅವಕಾಶ ಕೊಡ
ಬೇಡ. 17ನಾನು ಹೇಳುವುದನ್ನು ನೀನು ಮಾಡಿದರೆ,
ನಾನು ನಿನಗೆ ಹಣವನ್ನು ಮತ್ತು ಗೌರವವನ್ನು ಬಹಳವಾಗಿ
ಕೊಡುವೆನು ಮತ್ತು ನೀನು ಹೇಳಿದ್ದೆಲ್ಲವನ್ನು ಮಾಡು
ವೆನು. ಬಂದು, ನನಗಾಗಿ ಈ ಜನರನ್ನು ಶಪಿಸು'' ಎಂದು
ಹೇಳಿಸಿದನು.

18ಬಿಳಾಮನು ಬಾಲಾಕನ ಅಧಿಕಾರಿಗಳಿಗೆ, ''ನನ್ನ
ದೇವರಾದ ಯೆಹೋವನ ಆಜ್ಞೆಗೆ ವಿರೋಧವಾಗಿ
ನಾನೇನೂ ಮಾಡಲು ಸಾಧ್ಯವಿಲ್ಲ. ಯೆಹೋವನು ಅಪ್ಪಣೆ
ಕೊಡದ ಹೊರತು ನಾನು ಚಿಕ್ಕಕಾರ್ಯವನ್ನಾಗಲೀ
ದೊಡ್ಡಕಾರ್ಯವನ್ನಾಗಲೀ ಮಾಡಲಾರೆ. ಬಾಲಾಕನು
ತನ್ನ ಅರಮನೆ ತುಂಬ ಬೆಳ್ಳಿಬಂಗಾರಗಳನ್ನು ಕೊಟ್ಟರೂ
ಯೆಹೋವನ ಆಜ್ಞೆಗೆ ವಿರುದ್ಧವಾಗಿ ಏನನ್ನೂ ಮಾಡ
ಲಾರೆ. 19ಆದ್ದರಿಂದ ನೀವು ಸಹ ಈ ರಾತ್ರಿ ಇಲ್ಲೇ
ಇರಬೇಕು. ಯೆಹೋವನು ನನಗೆ ಇನ್ನೂ ಹೇಳ
ಬೇಕಾದದ್ದನ್ನು ಈ ರಾತ್ರಿ ತಿಳಿದುಕೊಳ್ಳುವೆನು'' ಎಂದು
ಹೇಳಿದನು.

20ಆ ರಾತ್ರಿ ದೇವರು ಬಿಳಾಮನ ಬಳಿಗೆ ಬಂದು, ''ಈ
ಜನರು ನಿನ್ನನ್ನು ತಮ್ಮೊಡನೆ ಬರಬೇಕೆಂದು ಆಹ್ವಾನಿಸಲು
ಬಂದಿದ್ದಾರೆ. ಆದ್ದರಿಂದ ನೀನು ಅವರೊಂದಿಗೆ ಹೋಗ
ಬಹುದು. ಆದರೆ ನಾನು ಹೇಳುವುದನ್ನು ಮಾತ್ರ ಮಾಡು''
ಎಂದು ಹೇಳಿದನು.

### ಬಿಳಾಮನು ಮತ್ತು ಅವನ ಕತ್ತೆ

21ಮರುದಿನ ಬೆಳಿಗ್ಗೆ ಬಿಳಾಮನು ತನ್ನ ಕತ್ತೆಗೆ ತಡಿಹಾಕಿಸಿ
ಮೋವಾಬ್ಯರ ಪ್ರಧಾನರ ಜೊತೆಯಲ್ಲಿ ಹೊರಟನು.
22ಬಿಳಾಮನು ಕತ್ತೆಯ ಮೇಲೆ ಸವಾರಿ ಮಾಡುತ್ತಿದ್ದನು.
ಅವನ ಜೊತೆ ಇಬ್ಬರು ಆಳುಗಳಿದ್ದರು. ಬಿಳಾಮನು
ಪ್ರಯಾಣ ಮಾಡತೊಡಗಿದ್ದರಿಂದ ದೇವರು ಕೋಪ
ಗೊಂಡನು. ಆದ್ದರಿಂದ ಯೆಹೋವನ ದೂತನು ಬಿಳಾಮ
ನನ್ನು ತಡೆಯಲು ದಾರಿಯಲ್ಲಿ ನಿಂತುಕೊಂಡನು.

[23]ಯೆಹೋವನ ದೂತನು ಬಿಚ್ಚುಕತ್ತಿಯನ್ನು ಹಿಡಿದು
ಕೊಂಡು ದಾರಿಯಲ್ಲೇ ನಿಂತಿರುವುದನ್ನು ಆ ಕತ್ತೆ ನೋಡಿ
ದಾರಿಯನ್ನು ಬಿಟ್ಟು ಬಯಲಿನ ಕಡೆ ಹೋಯಿತು.
ಕತ್ತೆಯನ್ನು ದಾರಿಗೆ ತಿರುಗಿಸುವದಕ್ಕೆ ಬಿಳಾಮನು ಅದನ್ನು
ಹೊಡೆದನು. ಅವನಿಗೆ ದೂತನು ಕಾಣಿಸಲಿಲ್ಲ. [24]ಆಮೇಲೆ
ಯೆಹೋವನ ದೂತನು ಎರಡು ದ್ರಾಕ್ಷಿತೋಟಗಳ
ನಡುವಿನ ಕಿರಿದಾದ ದಾರಿಯಲ್ಲಿ ನಿಂತುಕೊಂಡನು.
ಎರಡು ಕಡೆಯಲ್ಲಿಯೂ ಗೋಡೆಗಳಿದ್ದವು. [25]ತಿರುಗಿ
ಕತ್ತೆಯು ಯೆಹೋವನ ದೂತನನ್ನು ನೋಡಿ ಗೋಡೆಗೆ
ತನ್ನನ್ನು ಒತ್ತರಿಸಿಕೊಂಡಿತು. ಆಗ ಬಿಳಾಮನ ಪಾದವು
ಗೋಡೆಗೆ ಒತ್ತರಿಸಿತು. ಆದ್ದರಿಂದ ಬಿಳಾಮನು ತಿರುಗಿ
ಕತ್ತೆಯನ್ನು ಹೊಡೆದನು.

[26]ಬಳಿಕ ಯೆಹೋವನ ದೂತನು ಮತ್ತೆ ಮುಂದೆ
ಹೋಗಿ ಕತ್ತೆಯು ಎಡಕ್ಕಾಗಲೀ ಬಲಕ್ಕಾಗಲೀ ಹೊರ
ಳಲು ಸಾಧ್ಯವಿಲ್ಲದಷ್ಟು ಇನ್ನೂ ಕಿರಿದಾದ ಸ್ಥಳದಲ್ಲಿ ನಿಂತು
ಕೊಂಡನು. [27]ಕತ್ತೆಯು ಯೆಹೋವನ ದೂತನನ್ನು
ನೋಡಿ ಬಿಳಾಮನ ಕೆಳಗೆ ಅಡಗಿ ಮಲಗಿಕೊಂಡಿತು.
ಆಗ ಬಿಳಾಮನು ಸಿಟ್ಟುಗೊಂಡು ತನ್ನ ಕೋಲಿನಿಂದ
ಕತ್ತೆಯನ್ನು ಹೊಡೆದನು.

[28]ಆಗ ಯೆಹೋವನು ಆ ಕತ್ತೆಗೆ ಮಾತಾಡುವ ಶಕ್ತಿ
ಯನ್ನು ಕೊಟ್ಟನು. ಅದು ಬಿಳಾಮನನ್ನು, ‘‘ನೀನು
ಮೂರು ಸಾರಿ ನನ್ನನ್ನು ಹೊಡೆದದ್ದೇಕೆ? ನಾನು ನಿನ
ಗೇನು ಮಾಡಿದ್ದೇನೆ’’ ಎಂದು ಕೇಳಿತು.

[29]ಬಿಳಾಮನು, ‘‘ನೀನು ನನ್ನನ್ನು ಮೂರ್ಖನನ್ನಾಗಿ
ಮಾಡಿರುವೆ. ನನ್ನ ಕೈಯಲ್ಲಿ ಕತ್ತಿಯಿದ್ದರೆ ನಿನ್ನನ್ನು ಈಗಲೇ
ಕೊಂದು ಹಾಕಿ ಬಿಡುತ್ತಿದ್ದೆ’’ ಅಂದನು.

[30]ಅದಕ್ಕೆ ಕತ್ತೆಯು ಬಿಳಾಮನಿಗೆ, ‘‘ನೋಡು, ನಾನು
ನಿನ್ನ ಸ್ವಂತ ಕತ್ತೆ. ಅನೇಕಾನೇಕ ವರ್ಷಗಳಿಂದ ನೀನು ನನ್ನ
ಮೇಲೆ ಸವಾರಿ ಮಾಡುತ್ತಿರುವೆ. ನಾನು ಹಿಂದೆಂದೂ ಹೀಗೆ
ಮಾಡಲಿಲ್ಲವೆಂದು ನಿನಗೆ ತಿಳಿದದೆ’’ ಎಂದು ಹೇಳಿತು.

ಅದಕ್ಕೆ ಬಿಳಾಮನು, ‘‘ಅದು ನಿಜ’’ ಅಂದನು.

[31]ಆಗ ಯೆಹೋವನು ಬಿಳಾಮನ ಕಣ್ಣುಗಳನ್ನು ತೆರೆದು
ಬಿಚ್ಚುಕತ್ತಿಯನ್ನು ಹಿಡಿದುಕೊಂಡು ದಾರಿಯಲ್ಲಿ ನಿಂತಿ
ರುವ ಯೆಹೋವನ ದೂತನನ್ನು ನೋಡುವಂತೆ ಮಾಡಿ
ದನು. ಅವನನ್ನು ಕಂಡಾಗ ಬಿಳಾಮನು ಮೊಣಕಾಲೂರಿ
ತನ್ನ ಮುಖವನ್ನು ನೆಲದವರೆಗೂ ಬಾಗಿಸಿದನು.

[32]ಯೆಹೋವನ ದೂತನು ಬಿಳಾಮನಿಗೆ, ‘‘ನೀನು
ಮೂರು ಸಲವೂ ಕತ್ತೆಯನ್ನು ಹೊಡೆದದ್ದೇಕೆ? ನಿನ್ನ
ಪ್ರಯಾಣವು ನನ್ನ ಚಿತ್ತಕ್ಕೆ ವಿರುದ್ಧವಾದದ್ದರಿಂದ ನಿನ್ನನ್ನು
ತಡೆಯುವುದಕ್ಕೆ ನಾನೇ ಬಂದಿದ್ದೇನೆ. [33]ಆ ಕತ್ತೆ ನನ್ನನ್ನು
ನೋಡಿ ಮೂರು ಸಲ ನನ್ನೆದುರಿನಿಂದ ಇನ್ನೊಂದು ಕಡೆಗೆ
ತಿರುಗಿಕೊಂಡಿತು. ಹಾಗೆ ತಿರುಗಿಕೊಳ್ಳದಿದ್ದಲ್ಲಿ ನಾನು
ಕತ್ತೆಯನ್ನು ಉಳಿಸಿ ನಿನ್ನನ್ನು ಆಗಲೇ ಕೊಂದು ಹಾಕಿ
ಬಿಡುತ್ತಿದ್ದೆನು’’ ಎಂದು ಹೇಳಿದನು.

[34]ಆಗ ಬಿಳಾಮನು ಯೆಹೋವನ ದೂತನಿಗೆ, ‘‘ನಾನು
ಪಾಪ ಮಾಡಿದ್ದೇನೆ. ನೀನು ದಾರಿಯಲ್ಲಿ ನಿಂತುಕೊಂಡಿ
ರುವುದು ನನಗೆ ಗೊತ್ತಾಗಲಿಲ್ಲ. ನನ್ನ ಪ್ರಯಾಣವು ನಿನಗೆ
ಮೆಚ್ಚಿಕೆಯಾಗಿಲ್ಲದಿದ್ದರೆ, ನಾನು ಮನೆಗೆ ಹಿಂತಿರುಗು
ವೆನು’’ ಎಂದು ಹೇಳಿದನು.

[35]ಆಗ ಯೆಹೋವನ ದೂತನು ಬಿಳಾಮನಿಗೆ, ‘‘ಆ
ಮನುಷ್ಯರ ಜೊತೆಯಲ್ಲಿ ಹೋಗು. ಆದರೆ ನಾನು ನಿನಗೆ
ಹೇಳುವ ಮಾತನ್ನೇ ಹೊರತು ಬೇರೆ ಯಾವುದನ್ನೂ ಹೇಳ
ಬಾರದು’’ ಎಂದು ಹೇಳಿದನು. ಆದ್ದರಿಂದ ಬಿಳಾಮನು
ಬಾಲಾಕನ ನಾಯಕರೊಡನೆ ಹೋದನು.

[36]ಬಿಳಾಮನು ಬರುತ್ತಿರುವ ಸುದ್ದಿಯನ್ನು ಬಾಲಾಕನು
ಕೇಳಿ ಅವನನ್ನು ಎದುರುಗೊಳ್ಳುವುದಕ್ಕಾಗಿ ತನ್ನ ದೇಶದ
ಸರಹದ್ದಿನಲ್ಲಿ ಅರ್ನೋನ್ ನದಿಯ ಬಳಿಯಲ್ಲಿರುವ
ಮೋವಾಬ್ಯರ ಊರಿನಲ್ಲಿ ಅವನನ್ನು ಭೇಟಿಯಾಗಲು
ಹೋದನು. [37]ಬಾಲಾಕನು ಬಿಳಾಮನನ್ನು ಕಂಡಾಗ,
‘‘ನಿನ್ನನ್ನು ಅವಸರದಿಂದ ಕರೆಸುವುದಕ್ಕೆ ದೂತರನ್ನು ಕಳು
ಹಿಸಿದೆನಲ್ಲಾ. ನೀನು ಆಗಲೇ ಯಾಕೆ ಬರಲಿಲ್ಲ. ನಿನ್ನನ್ನು
ಘನಪಡಿಸುವುದಕ್ಕೆ ನಾನು ಸಮರ್ಥನಲ್ಲವೆಂದು ನೀನು
ಭಾವಿಸಿಕೊಂಡಿರುವಿಯಾ?’’ ಎಂದು ಕೇಳಿದನು.

[38]ಬಿಳಾಮನು, ‘‘ನಾನು ಈಗ ಬಂದಿದ್ದೇನೆ. ಆದರೆ,
ನಿನಗೆ ಇಷ್ಟವಾಗುವಂಥದ್ದನ್ನು ಹೇಳಲು ನನಗೆ
ಸಾಧ್ಯವಿಲ್ಲ. ದೇವರು ನನಗೆ ತಿಳಿಸುವುದನ್ನೇ ನಾನು ಹೇಳ
ಬೇಕು’’ ಅಂದನು.

[39]ಆಗ ಬಿಳಾಮನು ಬಾಲಾಕನೊಡನೆ ಕಿರ್ಯತ್
ಹುಚೋತಿಗೆ ಹೋದನು. [40]ಬಾಲಾಕನು ಹೋರಿಗಳನ್ನು
ಮತ್ತು ಕುರಿಗಳನ್ನು ವಧಿಸಿ ಯಜ್ಞಮಾಡಿ ಬಿಳಾಮನಿಗೂ
ಅವನ ಸಂಗಡವಿದ್ದ ಪ್ರಧಾನರಿಗೂ ಊಟಕ್ಕೆ
ಕಳುಹಿಸಿದನು. [41]ಮರುದಿನ ಬೆಳಿಗ್ಗೆ ಬಾಲಾಕನು
ಬಿಳಾಮನನ್ನು ಬಾಮೋತ್‌ಬಾಳ್ ಎಂಬ ಸ್ಥಳದವರೆಗೂ
ಕರೆದುಕೊಂಡು ಹೋದನು. ಅಲ್ಲಿಂದ ಇಸ್ರೇಲರ
ಪಾಳೆಯ ಸ್ವಲ್ಪಸ್ವಲ್ಪ ಕಾಣುತ್ತಿತ್ತು.

### ಬಿಳಾಮನ ಮೊದಲನೆಯ ಸಂದೇಶ

23 ಬಿಳಾಮನು ಬಾಲಾಕನಿಗೆ, ‘‘ಇಲ್ಲಿ ನೀನು ಏಳು
ಯಜ್ಞವೇದಿಕೆಗಳನ್ನು ನನಗೆ ಕಟ್ಟಿಸಿ ಏಳು
ಹೋರಿಗಳನ್ನೂ ಏಳು ಟಗರುಗಳನ್ನೂ ನನಗೆ ಸಿದ್ಧ
ಪಡಿಸು’’ ಅಂದನು. [2]ಬಾಲಾಕನು ಹಾಗೆಯೇ ಮಾಡಿ
ದನು. ಬಾಲಾಕನೂ ಬಿಳಾಮನೂ ಪ್ರತಿಯೊಂದು ಯಜ್ಞ
ವೇದಿಕೆಯ ಮೇಲೆ ಒಂದು ಹೋರಿಯನ್ನೂ ಒಂದು
ಟಗರನ್ನೂ ಸರ್ವಾಂಗಹೋಮವಾಗಿ ಸಮರ್ಪಿಸಿದಾಗ,

[3]ಬಿಳಾಮನು ಬಾಲಾಕನಿಗೆ, ‘‘ನೀನು ಸರ್ವಾಂಗ
ಹೋಮ ಮಾಡಿದ ಸ್ಥಳದಲ್ಲೇ ಇರು. ನಾನು ಸ್ವಲ್ಪದೂರ
ಹೋಗಿ ಬರುತ್ತೇನೆ. ಒಂದು ವೇಳೆ ಯೆಹೋವನು
ನನ್ನನ್ನು ಸಂಧಿಸಲು ಬರಬಹುದು. ಆತನು ನನಗೆ
ಪ್ರಕಟಿಸುವುದನ್ನು ನಿನಗೆ ತಿಳಿಸುವೆನು’’ ಎಂದು ಹೇಳಿ
ಮರವಿಲ್ಲದ ಒಂದು ದಿಣ್ಣೆಗೆ ಹೋದನು. [4]ದೇವರು
ಬಿಳಾಮನಿಗೆ ಎದುರಾಗಿ ಬಂದಾಗ ಬಿಳಾಮನು ಆತನಿಗೆ,
‘‘ನಾನು ಆ ಏಳು ಯಜ್ಞವೇದಿಕೆಗಳನ್ನು ಕಟ್ಟಿಸಿ
ಒಂದೊಂದು ಪೀಠದಲ್ಲಿ ಒಂದು ಹೋರಿಯನ್ನೂ ಒಂದು
ಟಗರನ್ನೂ ಸರ್ವಾಂಗಹೋಮವಾಗಿ ಸಮರ್ಪಿಸಿದ್ದೇನೆ’’
ಎಂದು ಹೇಳಿದನು.

[5]ಆಗ ಯೆಹೋವನು ಬಿಳಾಮನಿಗೆ ಅವನು ಹೇಳ
ಬೇಕಾದ ಮಾತನ್ನು ಕಲಿಸಿಕೊಟ್ಟು, ‘‘ನೀನು ಬಾಲಾಕನ
ಬಳಿಗೆ ತಿರುಗಿ ಹೋಗಿ ಹೀಗೆ ಹೇಳಬೇಕು’’ ಎಂದು
ಆಜ್ಞಾಪಿಸಿದನು.

[6]ಬಿಳಾಮನು ಬಾಲಾಕನ ಬಳಿಗೆ ತಿರುಗಿಬಂದಾಗ
ಬಾಲಾಕನು ಯಜ್ಞವೇದಿಕೆಯ ಬಳಿಯಲ್ಲಿ ನಿಂತಿದ್ದನು.
ಮೋವಾಬ್ಯರ ಪ್ರಧಾನರೆಲ್ಲರೂ ಅವನೊಡನೆ
ನಿಂತಿದ್ದರು. [7]ಆಗ ಬಿಳಾಮನು ಹೀಗೆ ಹೇಳಿದನು:

‘‘ಮೋವಾಬ್ಯರ ಅರಸನಾದ ಬಾಲಾಕನು ನನ್ನನ್ನು
ಅರಾಮಿನಿಂದ ಕರೆಸಿದನು. ಪೂರ್ವ ದಿಕ್ಕಿನ
ಬೆಟ್ಟಗಳಿಂದ ನನ್ನನ್ನು ಕರೇ ಕಳುಹಿಸಿದನು.
‘‘ನೀನು ಬಂದು ನನಗೋಸ್ಕರ ಯಾಕೋಬನನ್ನು
ಶಪಿಸು’’ ಎಂದು ಬಾಲಾಕನು ಹೇಳಿದನು.
8 ಆದರೆ ದೇವರು ಅವರನ್ನು ಆಶೀರ್ವದಿಸಿರುವಾಗ
ನಾನು ಅವರನ್ನು ಶಪಿಸಲು ಆಗುವುದಿಲ್ಲ.
ಯೆಹೋವನು ಅವರ ಮೇಲೆ ನಾಶನವನ್ನು ಬರ
ಮಾಡಲಿಲ್ಲ. ಆದ್ದರಿಂದ ನಾಶನವು ಅವರ ಮೇಲೆ
ಇಳಿದುಬರುವಂತೆ ಮಾಡಲು ನನಗೆ ಸಾಧ್ಯವಿಲ್ಲ.
9 ಬೆಟ್ಟದ ಶಿಖರದಿಂದ ಅವರನ್ನು ನಾನು ನೋಡಿ
ದೆನು; ಗುಡ್ಡದಿಂದ ಅವರನ್ನು ಕಂಡೆನು. ಅವರು
ತಮ್ಮನ್ನು ಇತರ ಜನಾಂಗಗಳಿಗಿಂತ ಬೇರೆ
ಯಾದವರು ಎಂದು ಪರಿಗಣಿಸಿಕೊಂಡಿದ್ದಾರೆ.
10 ಧೂಳಿನಷ್ಟು ಅಸಂಖ್ಯವಾದ ಯಾಕೋಬ್ಯರನ್ನು
ಲೆಕ್ಕಿಸುವುದಕ್ಕೆ ಯಾರಿಂದಾದೀತು; ಇಸ್ರೇಲರ
ಕಾಲ್ಭಾಗವನ್ನಾದರೂ ಯಾರೂ ಲೆಕ್ಕಿಸಲಾರರು.
ಸಜ್ಜನರಾದ ಅವರು ಸಾಯುವ ರೀತಿಯಲ್ಲೇ
ನಾನೂ ಸಾಯ ಬಯಸುವೆ. ಅವರಿಗುಂಟಾಗುವ
ಅಂತ್ಯ ನನಗೂ ಉಂಟಾಗಲಿ.’’

[11]ಬಾಲಾಕನು ಬಿಳಾಮನಿಗೆ, ‘‘ಇದೇನು ನೀನು ನನಗೆ
ಮಾಡಿದ್ದು! ನನ್ನ ಶತ್ರುಗಳನ್ನು ಶಪಿಸುವುದಕ್ಕೆ ನಿನ್ನನ್ನು
ಕರೆಸಿದೆನು. ನೀನು ಅವರನ್ನು ಶಪಿಸದೆ ಆಶೀರ್ವಾದವನ್ನೇ
ಮಾಡಿಬಿಟ್ಟೆ’’ ಎಂದು ಹೇಳಿದನು.

[12]ಅದಕ್ಕೆ ಬಿಳಾಮನು, ‘‘ಯೆಹೋವನು ನನಗೆ ತಿಳಿಸು
ವುದನ್ನು ನಾನು ಹೇಳಬಾರದೇ?’’ ಎಂದು ಕೇಳಿದನು.

[13]ಆಗ ಬಾಲಾಕನು, ‘‘ದಯಮಾಡಿ ನನ್ನೊಂದಿಗೆ
ಇನ್ನೊಂದು ಸ್ಥಳಕ್ಕೆ ಬಾ; ಅಲ್ಲಿಂದ ಅವರನ್ನು ನೋಡ
ಬಹುದು. ಆದರೆ ಅವರೆಲ್ಲರೂ ಕಾಣಿಸದೆ ಕಡೇಭಾಗವು
ಮಾತ್ರ ಕಾಣಿಸುವುದು. ಅಲ್ಲಿಂದ ನನಗೋಸ್ಕರ ಅವರನ್ನೇ
ಶಪಿಸಬೇಕು’’ ಎಂದು ಹೇಳಿದನು. [14]ಹೀಗೆ ಬಾಲಾಕನು
ಬಿಳಾಮನನ್ನು‘‘ಕಾವಲುಗಾರರ ಬೆಟ್ಟಗಳು’’ ಎಂಬ ಸ್ಥಳಕ್ಕೆ
ಕರೆದುಕೊಂಡು ಹೋದನು. ಇದು ಪಿಸ್ಗಾ ಪರ್ವತ
ಶ್ರೇಣಿಯ ತುದಿಯಲ್ಲಿತ್ತು. ಅಲ್ಲಿಯೂ ಏಳು ಯಜ್ಞ
ವೇದಿಕೆಗಳನ್ನು ಕಟ್ಟಿಸಿ ಪ್ರತಿಯೊಂದು ವೇದಿಕೆಯಲ್ಲಿ
ಒಂದು ಹೋರಿಯನ್ನು ಮತ್ತು ಒಂದು ಟಗರನ್ನು
ಸರ್ವಾಂಗ ಹೋಮವಾಗಿ ಸಮರ್ಪಿಸಿದನು.

[15]ಬಿಳಾಮನು ಬಾಲಾಕನಿಗೆ, ‘‘ನೀನು ನಿನ್ನ ಯಜ್ಞ
ವೇದಿಕೆಯ ಬಳಿಯಲ್ಲಿರು. ನಾನು ಆ ಕಡೆ ಹೋಗಿ
ಯೆಹೋವನನ್ನು ಸಂಧಿಸುವೆನು’’ ಎಂದು ಹೇಳಿದನು.

[16]ಯೆಹೋವನು ಬಿಳಾಮನಿಗೆ ಎದುರಾಗಿ ಬಂದು
ಅವನು ಹೇಳಬೇಕಾದ ಮಾತನ್ನು ಕಲಿಸಿಕೊಟ್ಟು, ‘‘ನೀನು
ಬಾಲಾಕನ ಬಳಿಗೆ ಹೋಗಿ ಹೀಗೆ ಹೇಳಬೇಕು’’ ಅಂದನು.
[17]ಬಿಳಾಮನು ಬಾಲಾಕನ ಬಳಿಗೆ ಬಂದಾಗ ಅವನು
ಇನ್ನೂ ಯಜ್ಞಪೀಠದ ಬಳಿಯಲ್ಲಿ ನಿಂತಿದ್ದನು.
ಮೋವಾಬ್ಯರ ಪ್ರಧಾನರು ಅವನ ಸಂಗಡ ಇದ್ದರು.
ಬಾಲಾಕನು,‘‘ಯೆಹೋವನು ಏನು ಹೇಳಿದ್ದಾನೆ?’’
ಎಂದು ಕೇಳಿದನು.

### ಬಿಳಾಮನ ಎರಡನೆಯ ಸಂದೇಶ

[18]ಆಗ ಬಿಳಾಮನು ಈ ಸಂಗತಿಗಳನ್ನು ಹೇಳಿದನು,

“ಬಾಲಾಕನೇ, ಎದ್ದುನಿಂತು ನಾನು ಹೇಳುವು
ದನ್ನು ಕೇಳು. ಚಿಪ್ಪೋರನ ಮಗನಾದ
ಬಾಲಾಕನೇ, ಕೇಳು.
19 ದೇವರು ಮನುಷ್ಯನಲ್ಲ; ಆತನು ಸುಳ್ಳಾಡು
ವುದಿಲ್ಲ. ದೇವರು ಮಾನವನಲ್ಲ; ಆತನ ಉದ್ದೇಶ
ಗಳು ಬದಲಾಗುವುದಿಲ್ಲ. ಯೆಹೋವನು ತಾನು
ಮಾಡುತ್ತೇನೆಂದು ಹೇಳಿದರೆ, ಅದನ್ನು
ಮಾಡಿಯೇ ಮಾಡುತ್ತಾನೆ. ಯೆಹೋವನು
ವಾಗ್ದಾನ ಮಾಡಿದರೆ, ಅದನ್ನು ನೆರವೇರಿಸುತ್ತಾನೆ.
20 ಆ ಜನರನ್ನು ಆಶೀರ್ವದಿಸಬೇಕೆಂದು
ಯೆಹೋವನು ನನಗೆ ಆಜ್ಞಾಪಿಸಿದನು;
ಯೆಹೋವನು ಅವರನ್ನು ಆಶೀರ್ವದಿಸಿದ್ದಾನೆ.
ಅದನ್ನು ಬದಲಾಯಿಸಲು ನನಗೆ ಸಾಧ್ಯವಿಲ್ಲ.

21 ಯಾಕೋಬನ ಜನರಲ್ಲಿ ಯಾವ ದೋಷವೂ
ಇಲ್ಲ. ಇಸ್ರೇಲಿನ ಜನರಲ್ಲಿ ಯಾವ ಆಪತ್ತು
ಕಾಣುತ್ತಿಲ್ಲ. ಯೆಹೋವನೇ ಅವರ ದೇವರು.
ಆತನು ಅವರೊಂದಿಗಿದ್ದಾನೆ.
22 ದೇವರು ಅವರನ್ನು ಈಜಿಪ್ಟಿನಿಂದ ಕರೆದು
ಕೊಂಡು ಬಂದನು. ಅವರು ಕಾಡು ಎತ್ತಿನಷ್ಟು
ಬಲಿಷ್ಠರಾಗಿದ್ದಾರೆ.
23 ನಿಜವಾಗಿಯೂ ಯಾಕೋಬನ ಜನರ ಮಧ್ಯ
ದಲ್ಲಿ ಶಕುನ ನೋಡುವವರು ಇಲ್ಲ. ಇಸ್ರೇಲಿನಲ್ಲಿ
ಕಣಿಹೇಳುವವರು ಇಲ್ಲ. ಯಾಕೋಬನಿಗೆ
ಒಂದುಸಲ ತಿಳಿಸಲಾಗಿದೆ. 'ಹೌದು, ದೇವರ
ಯೋಜನೆಯನ್ನು' ಇಸ್ರೇಲರಿಗೆ ತಿಳಿಸಲಾಗಿದೆ.
24 ಜನರು ಸಿಂಹದಂತೆ ಬಲಿಷ್ಠರು. ಅವರು ಸಿಂಹ
ದಂತೆ ಹೋರಾಡುತ್ತಾರೆ. ಆ ಸಿಂಹ ತನ್ನ ವೈರಿ
ಯನ್ನು ತಿಂದು ಬಿಡುವ ತನಕ ವಿಶ್ರಮಿಸುವುದಿಲ್ಲ.
ಆ ಸಿಂಹವು ತನಗೆ ಬಲಿಯಾದವರ ರಕ್ತವನ್ನು
ಹೀರುವವರೆಗೆ ಎಂದಿಗೂ ವಿಶ್ರಮಿಸುವುದಿಲ್ಲ.''

25ಆಗ ಬಾಲಾಕನು ಬಿಳಾಮನಿಗೆ, ''ನೀನು ಅವರನ್ನು
ಶಪಿಸಲೂ ಬೇಡ, ಆಶೀರ್ವದಿಸಲೂ ಬೇಡ'' ಎಂದು
ಹೇಳಿದನು.

26ಅದಕ್ಕೆ ಬಿಳಾಮನು, ''ಯೆಹೋವನು ಹೇಳುವು
ದನ್ನೇ ನಾನು ಮಾಡುತ್ತೇನೆ ಎಂದು ನಾನು ನಿನಗೆ
ಮೊದಲೇ ಹೇಳಲಿಲ್ಲವೆ'' ಅಂದನು.

27ಆಮೇಲೆ ಬಾಲಾಕನು ಬಿಳಾಮನಿಗೆ, ''ಸರಿ
ಇನ್ನೊಂದು ಸ್ಥಳಕ್ಕೆ ಬಾ. ಒಂದು ವೇಳೆ ನೀನು ಅವರನ್ನು
ಶಪಿಸಬೇಕೆಂದು ದೇವರು ಅಪೇಕ್ಷೆಪಡಬಹುದು'' ಎಂದು
ಹೇಳಿದನು. 28ಬಾಲಾಕನು ಬಿಳಾಮನನ್ನು ''ಪೆಗೋರ್''
ಬೆಟ್ಟದ ತುದಿಗೆ ಕರೆದುಕೊಂಡು ಹೋದನು. ಆ ಬೆಟ್ಟದ
ಮೇಲಿಂದ ಕೆಳಗಿರುವ ಮರುಭೂಮಿಯು ಕಾಣಿಸುತ್ತದೆ.

29ಆಗ ಬಿಳಾಮನು ಬಾಲಾಕನಿಗೆ, ''ಇಲ್ಲಿಯೂ ಏಳು
ಯಜ್ಞವೇದಿಕೆಗಳನ್ನು ಕಟ್ಟಿಸಿ ಏಳು ಹೋರಿಗಳನ್ನು ಮತ್ತು
ಏಳು ಟಗರುಗಳನ್ನು ಸಿದ್ಧಪಡಿಸು'' ಎಂದು ಹೇಳಿದನು.
30ಬಾಲಾಕನು ಅವನ ಅಪ್ಪಣೆಯ ಮೇರೆಗೆ ಪ್ರತಿ
ಯೊಂದನ್ನು ಮಾಡಿ ಪ್ರತಿಯೊಂದು ಪೀಠದಲ್ಲಿ ಒಂದು
ಹೋರಿಯನ್ನು ಮತ್ತು ಒಂದು ಟಗರನ್ನು ಸರ್ವಾಂಗ
ಹೋಮವಾಗಿ ಅರ್ಪಿಸಿದನು.

### ಬಿಳಾಮನ ಮೂರನೆ ಸಂದೇಶ

24 ಇಸ್ರೇಲರನ್ನುಆಶೀರ್ವದಿಸುವುದೇಯೆಹೋವನ
ಆಸೆಯೆಂದು ಬಿಳಾಮನು ತಿಳಿದುಕೊಂಡನು.
ಆದ್ದರಿಂದ ಬಿಳಾಮನು ಮೊದಲಿನಂತೆ ಶಕುನ ನೋಡು
ವುದಕ್ಕೆ ಹೋಗದೆ ಮರುಭೂಮಿಯ ಕಡೆಗೆ ಮುಖವನ್ನು
ತಿರುಗಿಸಿಕೊಂಡನು. 2ಬಿಳಾಮನು ಕಣ್ಣೆತ್ತಿ ನೋಡಲಾಗಿ
ಇಸ್ರೇಲರೆಲ್ಲರನ್ನು ನೋಡಿದನು. ಅವರು ತಮ್ಮ ಕುಲಗಳ
ಪ್ರಕಾರ ಡೇರೆಗಳನ್ನು ಹಾಕಿ ಕೊಂಡಿದ್ದರು. 3ಆಗ ಅವನು
ದೇವರಾತ್ಮ ಪ್ರೇರಿತನಾಗಿ ಇಂತೆಂದನು:

''ಬೆಯೋರನ ಮಗನಾದ ಬಿಳಾಮನ ಸಂದೇಶವಿದು.
ನನ್ನ ಕಣ್ಣುಗಳು ತೆರೆಯಲ್ಪಟ್ಟಿವೆ. ನಾನು ನೋಡುವುದನ್ನೇ
ಹೇಳುತ್ತೇನೆ.

4ನಾನು ಈ ಸಂದೇಶವನ್ನು ದೇವರಿಂದ ಕೇಳಿದೆನು.
ಸರ್ವಶಕ್ತನಾದ ದೇವರು ತೋರಿಸಿದವುಗಳನ್ನು ನೋಡಿ
ದೆನು. ನಾನು ಸ್ಪಷ್ಟವಾಗಿ ನೋಡುವುದನ್ನು ದೀನತೆ
ಯಿಂದ ತಿಳಿಸುತ್ತೇನೆ.

5''ಯಾಕೋಬ್ಯರೇ, ನಿಮ್ಮ ಡೇರೆಗಳು ಬಹಳ ಚೆಲು
ವಾಗಿವೆ! ಇಸ್ರೇಲರೇ, ನೀವು ವಾಸಿಸುವ ಸ್ಥಳಗಳು ಬಹಳ
ರಮ್ಯವಾಗಿವೆ!

6ನಿಮ್ಮ ಗುಡಾರಗಳು ಕಣಿವೆಗಳಂತೆ ಹರಡಿಕೊಂಡಿವೆ.
ನಿಮ್ಮ ಗುಡಾರಗಳು ನದಿಯ ಬಳಿಯಿರುವ ತೋಟ
ಗಳಂತಿವೆ. ನಿಮ್ಮ ಗುಡಾರಗಳು ಯೆಹೋವನು ನೆಟ್ಟ
ಸುವಾಸನೆಯ ಪೊದೆಗಳಂತೆಯೂ ನೀರಿನ ಬಳಿಯಿರುವ
ದೇವದಾರಿನ ಮರದಂತೆಯೂ ಇವೆ.

7ನಿಮಗೆ ಕುಡಿಯಲು ಯಾವಾಗಲೂ ಬೇಕಾದಷ್ಟು
ನೀರು ಇರುವುದು. ನೀವು ಬಿತ್ತಿದ ಬೀಜಗಳು ಬೆಳೆಯಲು
ಸಾಕಷ್ಟು ನೀರು ಇರುವುದು. ನಿಮ್ಮ ಅರಸನು ಆಗಾಗ್
ಎಂಬವನಿಗಿಂತಲೂ ದೊಡ್ಡವನಾಗಿದ್ದಾನೆ. ನಿಮ್ಮ
ರಾಜ್ಯವು ಬಹಳ ಬಲಿಷ್ಠವಾಗಿರುವುದು.

8''ದೇವರು ಆ ಜನರನ್ನು ಈಜಿಪ್ಟಿನಿಂದ ಕರೆದು
ಕೊಂಡು ಬಂದನು. ಅವರು ಕಾಡು ಎತ್ತಿನಂತೆ ಬಲಿಷ್ಠ
ರಾಗಿದ್ದಾರೆ. ಅವರು ತಮ್ಮೆಲ್ಲಾ ಶತ್ರುಗಳನ್ನು ಸೋಲಿಸು
ವರು. ಅವರು ತಮ್ಮ ವೈರಿಗಳ ಮೂಳೆಗಳನ್ನು ಮುರಿದು
ಹಾಕುವರು. ಅವರ ಬಾಣಗಳು ಅವರ ವೈರಿಗಳನ್ನು
ಕೊಲ್ಲುವವು. 9'ಅವರು ಅಡಗಿಕೊಂಡಿರುವರು; ಇಸ್ರೇ
ಲರು ಸಿಂಹದಂತೆಯೂ ಹೆಣ್ಣು ಸಿಂಹದಂತೆಯೂ ವಿಶ್ರಮಿ
ಸುವರು. ಅದನ್ನು ಎಬ್ಬಿಸಲು ಯಾರಿಗೆ ಧೈರ್ಯವಿದೆ.
ನಿಮ್ಮನ್ನು ಆಶೀರ್ವದಿಸುವವನು ಆಶೀರ್ವದಿಸಲ್ಪಡು
ವನು. ನಿಮ್ಮನ್ನು ಶಪಿಸುವವನು ಶಪಿಸಲ್ಪಡುವನು.''

10ಬಾಲಾಕನು ಬಿಳಾಮನ ಮೇಲೆ ಕೋಪಗೊಂಡು,
ಚಪ್ಪಾಳೆಹೊಡೆದು, ''ನನ್ನ ಶತ್ರುಗಳನ್ನು ಶಪಿಸುವುದಕ್ಕೆ
ನಿನ್ನನ್ನು ಕರೆಸಿದೆನು. ಆದರೆ ನೀನು ಅವರನ್ನು ಮೂರು
ಸಾರಿಯೂ ಆಶೀರ್ವದಿಸಿದೆ. 11ಆದ್ದರಿಂದ ನೀನೀಗ ನೇರ
ವಾಗಿ ಮನೆಗೆ ಹೋಗಿಬಿಡು. ನಿನಗೆ ಹೆಚ್ಚು ಹಣ ಕೊಡುವು
ದಾಗಿ ಆಲೋಚಿಸಿದ್ದೆನು. ಆದರೆ ನಿನ್ನ ಬಹುಮಾನವನ್ನು
ಕಳೆದುಕೊಳ್ಳುವಂತೆ ಯೆಹೋವನು ಮಾಡಿದನು''
ಎಂದು ಹೇಳಿದನು.

12-13ಅದಕ್ಕೆ ಬಿಳಾಮನು ಬಾಲಾಕನಿಗೆ, ‘‘ಬಾಲಾಕನು
ತನ್ನ ಮನೆ ತುಂಬ ಬೆಳ್ಳಿಬಂಗಾರವನ್ನು ಕೊಟ್ಟರೂ ನಾನು
ಯೆಹೋವನ ಆಜ್ಞೆಯನ್ನು ಮೀರಿ ನನಗೆ ಇಷ್ಟಬಂದಂತೆ
ಕೆಟ್ಟದ್ದನ್ನಾಗಲೀ ಒಳ್ಳೆಯದನ್ನಾಗಲೀ ನಾನು ಮಾಡ
ಲಾರೆನು; ಆದರೆ ಯೆಹೋವನು ಆಜ್ಞಾಪಿಸುವುದನ್ನೇ
ಮಾತಾಡುವೆನೆಂದು ನೀನು ನನ್ನ ಬಳಿಗೆ ಕಳುಹಿಸಿದ
ದೂತರಿಗೆ ಹೇಳಲಿಲ್ಲವೇ. 14ಆಗಲಿ, ನಾನು ನನ್ನ ಸ್ವಜನರ
ಬಳಿಗೆ ಹೋಗುತ್ತೇನೆ. ಆದರೆ ಮುಂದೆ ಆ ಜನರು ನಿನ್ನ
ಜನರಿಗೆ ಏನು ಮಾಡುವರೋ ಅದನ್ನು ನಿನಗೆ ತಿಳಿಸು
ತ್ತೇನೆ, ಕೇಳು’’ ಎಂದು ಹೇಳಿದನು.

### ಬಿಳಾಮನ ಕೊನೆಯ ಸಂದೇಶ

15ಆಗ ಬಿಳಾಮನು ಇಂತೆಂದನು: ‘‘ಬೆಯೋರನ
ಮಗನಾದ ಬಿಳಾಮನ ಸಂದೇಶವಿದು: ನಾನು ಸ್ಪಷ್ಟವಾಗಿ
ನೋಡುತ್ತಿರುವ ಸಂಗತಿಗಳ ಬಗ್ಗೆ ಮಾತಾಡುತ್ತಿದ್ದೇನೆ.
16‘‘ನಾನು ದೇವರ ಮುಂದೆ ಅಡ್ಡಬೀಳುತ್ತೇನೆ, ಆದರೆ
ನನ್ನ ಕಣ್ಣುಗಳು ಮುಚ್ಚಲ್ಪಟ್ಟಿಲ್ಲ. ನಾನು ದೇವರ ವಾಕ್ಯ
ಗಳನ್ನು ಕೇಳುತ್ತಿದ್ದೇನೆ. ನಾನು ಮಹೋನ್ನತನಾದ ದೇವ
ರಿಂದ ಜ್ಞಾನವನ್ನು ಹೊಂದಿಕೊಳ್ಳುತ್ತಿದ್ದೇನೆ. ಸರ್ವಶಕ್ತ
ನಾದ ದೇವರು ತೋರಿಸುವ ಸಂಗತಿಗಳನ್ನು ನಾನು
ನೋಡುತ್ತಿದ್ದೇನೆ. 17ಬರುತ್ತಿರುವ ಒಬ್ಬನನ್ನು ನೋಡುತ್ತಿ
ದ್ದೇನೆ. ಆದರೆ ಈಗಲ್ಲ. ಬರುತ್ತಿರುವ ಒಬ್ಬನನ್ನು ನೋಡು
ತ್ತಿದ್ದೇನೆ. ಆದರೆ ಬೇಗನೆ ಅಲ್ಲ. ಯಾಕೋಬನ ವಂಶ
ದಿಂದ ನಕ್ಷತ್ರವೊಂದು ಬರುವುದು. ಇಸ್ರೇಲರಿಂದ ಅರಸ
ನೊಬ್ಬನು ಬರುವನು. ಅವನು ಮೋವಾಬ್ಯರ ತಲೆಯನ್ನು
ಜಜ್ಜುವನು. ಆ ಅರಸನು ಶೇತನ ಪುತ್ರರೆಲ್ಲರ ತಲೆಗಳನ್ನು
ಜಜ್ಜುವನು.
18‘‘ಇಸ್ರೇಲರು ಬಲಿಷ್ಠರಾಗುವರು. ಅವರು
ಎದೋಮ್ ದೇಶವನ್ನು ಪಡೆಯುವರು. ಅವರು ತಮ್ಮ
ವೈರಿಯಾದ ಸೇಯೀರನ ದೇಶವನ್ನು ಪಡೆಯುವರು.
19‘‘ಯಾಕೋಬನ ವಂಶದಿಂದ ಹೊಸ ಅರಸನೊಬ್ಬನು
ಬರುವನು. ಆ ಅರಸನು ಆ ಪಟ್ಟಣದಲ್ಲಿ ಉಳಿದವರನ್ನು
ನಾಶಮಾಡುವನು.’’
20‘‘ತರುವಾಯ ಬಿಳಾಮನು ಅಮಾಲೇಕ್ಯರನ್ನು
ನೋಡಿ ಹೀಗಂದನು:
‘‘ಅಮಾಲೇಕ್ಯರು ಎಲ್ಲಾ ಜನಾಂಗಗಳಲ್ಲಿ ಬಲಿಷ್ಠರು;
ಅಮಾಲೇಕ್ಯರು ಎಲ್ಲಾ ಜನಾಂಗಗಳಲ್ಲಿ ಮೊದಲನೆಯ
ವರು; ಆದರೆ ಕೊನೆಯಲ್ಲಿ ಅವರು ನಾಶವಾಗುವರು.’’
21ಆಗ ಬಿಳಾಮನು ಕೇನ್ಯರನ್ನು ನೋಡಿ ಹೀಗಂದನು:
‘‘ನಿಮ್ಮ ಮನೆಯು ಬೆಟ್ಟದ ತುದಿಯಲ್ಲಿರುವ ಪಕ್ಷಿಯ
ಗೂಡಿನಂತೆ* ಸುರಕ್ಷಿತವಾಗಿದೆಯೆಂದು ನೀವು
ನಂಬುತ್ತೀರಿ.
22‘‘ಆದರೆ ಕೇನ್ಯರೇ, ಅಶ್ಶೂರವು ನಿಮ್ಮನ್ನು ಸೆರೆ
ಹೊಯ್ಯುವಾಗ ಅದು ನಾಶವಾಗುವುದು.’’ 23ಆಗ
ಬಿಳಾಮನು ಹೀಗಂದನು: ‘‘ದೇವರು ಇದನ್ನು
ಮಾಡುವಾಗ ಯಾರೂ ಉಳಿಯರು.
24‘‘ಸೈಪ್ರಸ್‌ನ ತೀರಗಳಿಂದ ಹಡಗುಗಳು ಬರುವವು.
ಅವರು ಅಶ್ಶೂರವನ್ನೂ ಏಬೆರವನ್ನೂ ಸೋಲಿಸುವರು;
ಆದರೆ ಅವರು ಸಹ ನಾಶವಾಗುವರು.’’
25ಆಗ ಬಿಳಾಮನು ಎದ್ದು ತನ್ನ ಸ್ಥಳಕ್ಕೆ ಹಿಂತಿರುಗಿ
ಹೋದನು. ಬಾಲಾಕನೂ ಸಹ ಹೊರಟುಹೋದನು.

### ಪೆಯೋರಿನಲ್ಲಿ ಇಸ್ರೇಲರು

25 ಇಸ್ರೇಲರು ಅಖಾಸಿಯದ ಸಮೀಪದಲ್ಲಿ
ಇಳಿದುಕೊಂಡಿದ್ದರು. ಅವರು ಅಲ್ಲಿದ್ದಾಗ
ಮೋವಾಬ್ ಸ್ತ್ರೀಯರೊಡನೆ ಲೈಂಗಿಕ ಪಾಪಗಳನ್ನು
ಮಾಡತೊಡಗಿದರು. 2-3ಮೋವಾಬ್ ಸ್ತ್ರೀಯರು ತಮ್ಮ
ಸುಳ್ಳುದೇವರಿಗೆ ಮಾಡಿದ ಔತಣಯಜ್ಞಗಳಿಗೆ ಅವರನ್ನು
ಆಮಂತ್ರಿಸಿದರು. ಹೀಗಾಗಿ ಇಸ್ರೇಲರು ಅವರ ಯಜ್ಞಗಳ
ಆಹಾರವನ್ನು ತಿಂದರು ಮತ್ತು ಅವರ ದೇವರನ್ನು ಪೂಜಿಸಿ
ದರು. ಈ ರೀತಿ ಇಸ್ರೇಲರು ಸುಳ್ಳುದೇವರಾದ ಪೆಗೋರ್
ಬಾಳನ ಭಕ್ತರಾದರು. ಹೀಗಾಗಿ ಯೆಹೋವನು ಅವರ
ಮೇಲೆ ಬಹಳವಾಗಿ ಕೋಪಗೊಂಡನು. 4ಯೆಹೋವನು
ಮೋಶೆಗೆ, ‘‘ನೀನು ಜನರ ನಾಯಕರನ್ನೆಲ್ಲ ಬಂಧಿಸಿ
ಯೆಹೋವನ ಮುಂದೆ ಬಹಿರಂಗವಾಗಿ ಅವರನ್ನು ನೇಣು
ಗಂಬಕ್ಕೆ ಏರಿಸು. ಹೀಗೆ ಯೆಹೋವನ ಕೋಪಾಗ್ನಿಯನ್ನು
ಇಸ್ರೇಲರಿಂದ ತೊಲಗಿಸಬೇಕು’’ ಎಂದು ಹೇಳಿದನು.
5ಆದಕಾರಣ ಮೋಶೆ ಇಸ್ರೇಲರ ನ್ಯಾಯಾಧಿಪತಿಗಳಿಗೆ,
‘‘ನಿಮ್ಮಲ್ಲಿ ಪ್ರತಿಯೊಬ್ಬನು ಪೆಗೋರದ ಬಾಳನಿಗೆ ಸೇರಿ
ಕೊಂಡ ತನ್ನತನ್ನ ವಶದಲ್ಲಿರುವವರನ್ನು ಕೊಲ್ಲಬೇಕು’’
ಎಂದು ಆಜ್ಞಾಪಿಸಿದನು.
6ಆಗ ಮೋಶೆ ಮತ್ತು ಇಡೀ ಇಸ್ರೇಲ್ ಸಮುದಾಯವು
ಒಟ್ಟಾಗಿ ಸೇರಿಬಂದು ದೇವದರ್ಶನಗುಡಾರದ ಬಾಗಿ
ಲಲ್ಲಿ ಅಳುತ್ತಿದ್ದರು. ಅಷ್ಟರಲ್ಲಿ ಇಸ್ರೇಲ್ ಮನುಷ್ಯ
ನೊಬ್ಬನು ಮಿದ್ಯಾನ್ ಸ್ತ್ರೀಯೊಬ್ಬಳನ್ನು ತನ್ನ ಸಂಬಂಧಿಕರ
ಬಳಿಗೆ ಕರೆದುಕೊಂಡು ಬಂದನು. ಮೋಶೆಯ ಮತ್ತು
ಎಲ್ಲಾ ಜನರ ಕಣ್ಣೆದುರಿನಲ್ಲೇ ಅವನು ಹೀಗೆ ಮಾಡಿದನು.
7ಕೂಡಲೇ ಯಾಜಕನಾಗಿದ್ದ ಆರೋನನ ಮೊಮ್ಮಗನೂ
ಎಲ್ಲಾಜಾರನ ಮಗನೂ ಆದ ಫೀನೆಹಾಸನು ಸಭೆಯ
ನಡುವೆಯಿಂದೆದ್ದು ಈಟಿಯನ್ನು ತೆಗೆದುಕೊಂಡು 8ಆ
ಇಸ್ರೇಲನನ್ನು ಹಿಂಬಾಲಿಸಿ ಮದುವೆಯ ಮಲಗುವ
ಕೋಣೆಯೊಳಗೆ ಹೋಗಿ ಅವನನ್ನೂ ಆ ಮಿದ್ಯಾನ್
ಸ್ತ್ರೀಯನ್ನೂ ಒಂದೇ ಏಟಿನಿಂದ ಹೊಟ್ಟೆಯಲ್ಲಿ ತಿವಿದು
ಕೊಂದನು. ಆಗ ಇಸ್ರೇಲರಿಗುಂಟಾದ ವ್ಯಾಧಿ ನಿಂತು

---

**ಗೂಡು** ಹೀಬ್ರೂ ಭಾಷೆಯಲ್ಲಿ ಈ ಪದವು ‘‘ಕೇನ್ಯರು’’ ಎಂಬ ಉಚ್ಚರಣೆಯನ್ನು ಹೊಂದಿದೆ.

ಹೋಯಿತು. 9ಆ ವ್ಯಾಧಿಯಿಂದ ಇಪ್ಪತ್ತನಾಲ್ಕು ಸಾವಿರ
ಜನರು ಸತ್ತುಹೋದರು.
10-11ಆಗ ಯೆಹೋವನು ಮೋಶೆಗೆ, ‘‘ನಾನೇ ನನ್ನ
ಗೌರವವನ್ನು ಕಾಪಾಡಿಕೊಳ್ಳುವ ಮೇರೆಗೆ ಯಾಜಕ
ನಾಗಿದ್ದ ಆರೋನನ ಮೊಮ್ಮಗನೂ ಎಲ್ಲಾಜಾರನ
ಮಗನೂ ಆಗಿರುವ ಫೀನೆಹಾಸನು ನನ್ನ ಗೌರವವನ್ನು
ಕಾಪಾಡಿ ಇಸ್ರೇಲರ ಮೇಲಿದ್ದ ನನ್ನ ಕೋಪವನ್ನು
ತೊಲಗಿಸಿದ್ದಾನೆ. ಹೀಗಿರುವುದರಿಂದ ನಾನು ನನ್ನ
ಗೌರವವನ್ನು ಕಾಪಾಡಿಕೊಳ್ಳುವುದಕ್ಕಾಗಿ ಇಸ್ರೇಲರನ್ನು
ನಿರ್ಮೂಲ ಮಾಡುವ ಅಗತ್ಯವಿಲ್ಲ. 12ಆದಕಾರಣ ನಾನು
ಅವನ ಸಂಗಡ ಸಮಾಧಾನದ ಒಡಂಬಡಿಕೆಯನ್ನು
ಮಾಡಿಕೊಳ್ಳುತ್ತೇನೆಂದು ಎಲ್ಲರಿಗೂ ತಿಳಿಸು; 13ಆ
ಒಡಂಬಡಿಕೆಯು ಅವನಿಗೂ ಅವನ ತರುವಾಯ ಅವನ
ಸಂತತಿಯವರಿಗೂ ಯಾಜಕತ್ವವು ಶಾಶ್ವತವಾಗಿಯೇ
ಇರುವುದೆಂದು ಮಾತುಕೊಡುತ್ತೇನೆ. ಅವನು ತನ್ನ
ದೇವರ ಗೌರವವನ್ನು ಕಾಪಾಡಿ ಇಸ್ರೇಲರಿಗೋಸ್ಕರ
ದೋಷಪರಿಹಾರವನ್ನು ಮಾಡಿದ್ದರಿಂದ ನಾನು ಅವನಿಗೆ
ಈ ಮಾತನ್ನು ಕೊಟ್ಟಿದ್ದೇನೆ’’ ಎಂದು ಹೇಳಿದನು.
14ಆ ಮಿದ್ಯಾನ್ ಸ್ತ್ರೀಯೊಡನೆ ಕೊಲ್ಲಲ್ಪಟ್ಟವನು
ಸಿಮೆಯೋನ್ ಕುಲದವರಲ್ಲಿ ಗೋತ್ರಪ್ರಧಾನನಾಗಿದ್ದ
ಜಿಮ್ರೀ. ಇವನು ಸಾಲೂ ಎಂಬವನ ಮಗ. 15ಹತಳಾದ
ಮಿದ್ಯಾನ್ ಸ್ತ್ರೀಯ ಹೆಸರು ಕೊಜ್ಬೀ. ಅವಳು ಮಿದ್ಯಾನ್ಯ
ರಲ್ಲಿ ಗೋತ್ರಪ್ರಧಾನನಾದ ಅಥವಾ ಕುಟುಂಬಪ್ರಧಾನ
ನಾದ ಚೂರ್ ಎಂಬವನ ಮಗಳು.
16ತರುವಾಯ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ, 17‘‘ನೀನು ಮಿದ್ಯಾನ್ಯರನ್ನು ವೈರಿಗಳೆಂದು
ಪರಿಗಣಿಸಿರುವುದರಿಂದ ಅವರನ್ನು ಸಂಹರಿಸಬೇಕು.
18ಯಾಕೆಂದರೆ ಅವರು ನಿಮ್ಮನ್ನು ವೈರಿಗಳೆಂದು ಪರಿಗಣಿಸಿ
ಪೆಗೋರನ ಘಟನೆಯಲ್ಲಿ ನಿಮ್ಮನ್ನು ಮೋಸಗೊಳಿಸಿ
ದರು. ಮಿದ್ಯಾನಿನ ನಾಯಕನೊಬ್ಬನ ಮಗಳೂ ತಮ್ಮ
ರಕ್ತಸಂಬಂಧಿಯೂ ಆಗಿದ್ದ ಕೊಜ್ಬೀಯ ವಿಷಯ
ದಲ್ಲಿಯೂ ಅವರು ನಿಮ್ಮನ್ನು ಮೋಸಗೊಳಿಸಿದರು.
ಪೆಗೋರಿನ ಘಟನೆಯಿಂದ ಇಸ್ರೇಲರಿಗೆ ಕಾಯಿಲೆ
ಉಂಟಾದಾಗ ಆ ಸ್ತ್ರೀಯೂ ಸತ್ತಳು.’’

## ಜನರು ಲೆಕ್ಕಿಸಲ್ಪಟ್ಟದ್ದು

26 ಆ ಘೋರ ವ್ಯಾಧಿ ನಿಂತಮೇಲೆ ಯೆಹೋವನು
ಮೋಶೆಗೂ ಯಾಜಕ ಆರೋನನ ಮಗನಾದ
ಎಲ್ಲಾಜಾರನಿಗೂ, 2‘‘ನೀವು ಇಸ್ರೇಲರ ಸರ್ವಸಮೂಹ
ದವರಲ್ಲಿ ಇಪ್ಪತ್ತು ವರ್ಷ ಮೊದಲುಗೊಂಡು ಹೆಚ್ಚಾದ
ವಯಸ್ಸಾಗಿರುವ ಮತ್ತು ಇಸ್ರೇಲ್ ಸೈನ್ಯದಲ್ಲಿ ಸೇವೆ
ಮಾಡಲು ಶಕ್ತರಾಗಿರುವ ಗಂಡಸರನ್ನು ಕುಟುಂಬ
ಕುಟುಂಬಗಳ ಪ್ರಕಾರ ಲೆಕ್ಕಿಸಬೇಕು’’ ಎಂದು
ಆಜ್ಞಾಪಿಸಿದನು.
3ಈ ಸಮಯದಲ್ಲಿ ಜನರು ಮೋವಾಬಿನ
ಬಯಲುಗಳಲ್ಲಿ ತಂಗಿದ್ದರು. ಇದು ಜೆರಿಕೋ ಪಟ್ಟಣದ
ಆಚೆಕಡೆಯಲ್ಲಿರುವ ಜೋರ್ಡನ್ ನದಿಯ ಸಮೀಪ
ದಲ್ಲಿತ್ತು. ಮೋಶೆ ಮತ್ತು ಯಾಜಕನಾದ ಎಲ್ಲಾಜಾರನು
ಜನರೊಡನೆ ಮಾತಾಡಿ ಹೇಳಿದ್ದೇನೆಂದರೆ: 4‘‘ಮೋಶೆ
ಮತ್ತು ಇಸ್ರೇಲರು ಈಜಿಪ್ಟಿನಿಂದ ಹೊರಬಂದಾಗ
ಯೆಹೋವನು ಮೋಶೆಗೆ ಆಜ್ಞಾಪಿಸಿದ್ದಂತೆಯೇ ನೀವು
ಇಪ್ಪತ್ತು ವರ್ಷ ಮೊದಲುಗೊಂಡು ಹೆಚ್ಚು ವಯಸ್ಸಾದ
ಗಂಡಸರನ್ನು ಲೆಕ್ಕಿಸಬೇಕು.’’
5ರೂಬೇನ್ ಕುಲದ ಜನರು: (ರೂಬೇನನು
ಇಸ್ರೇಲನ (ಯಾಕೋಬನ) ಚೊಚ್ಚಲ ಮಗನು.)

ಹನೋಕನ ಕುಟುಂಬದವರಾದ ಹನೋಕ್ಯರು;
ಪಲ್ಲೂವಿನ ಕುಟುಂಬದವರಾದ ಪಲ್ಲೂವಿ
ನವರು;
6 ಹೆಚ್ರೋನನ ಕುಟುಂಬದವರಾದ ಹೆಚ್ರೋ
ನ್ಯರು; ಕರ್ಮೀಯ ಕುಟುಂಬದವರಾದ
ಕರ್ಮೀಯರು.

7ರೂಬೇನ್ಯ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ
ಒಟ್ಟು ಸಂಖ್ಯೆ 43,730.
8ಪಲ್ಲೂವಿನ ಮಗನು ಎಲೀಯಾಬ್. 9ಎಲೀಯಾಬನ
ಗಂಡುಮಕ್ಕಳು: ನೆಮೂವೇಲ್, ದಾತಾನ್,
ಅಬೀರಾಮ್ ಎಂಬವರೇ. ಕೋರಹನ ಗುಂಪಿನವರು
ಯೆಹೋವನಿಗೆ ವಿರೋಧವಾಗಿ ದಂಗೆಯೆದ್ದ ಕಾಲದಲ್ಲಿ
ಅವರೊಳಗೆ ಸೇರಿಕೊಂಡು ಮೋಶೆ ಆರೋನರಿಗೆ
ವಿರೋಧವಾಗಿ ದಂಗೆ ಎದ್ದವರೇ ದಾತಾನ್ ಮತ್ತು
ಅಬೀರಾಮ್. 10ಭೂಮಿಯು ಬಾಯ್ದೆರೆದು ಅವರನ್ನೂ
ಕೋರಹನನ್ನೂ ನುಂಗಿಬಿಟ್ಟಿತು ಮತ್ತು ಬೆಂಕಿಯು ಆ
ಗುಂಪಿನವರಲ್ಲಿ ಇತರ ಇನ್ನೂರೈವತ್ತು ಮಂದಿಯನ್ನು
ದಹಿಸಿ ಇಸ್ರೇಲರಿಗೆ ಎಚ್ಚರಿಕೆಯುಂಟಾಗುವ ಹಾಗೆ
ಮಾಡಿತು. 11ಆ ಗುಂಪಿನವರೆಲ್ಲರು ಸತ್ತರೂ ಕೋರಹನ
ಮಕ್ಕಳು ಆ ಕಾಲದಲ್ಲಿ ಸಾಯಲಿಲ್ಲ.
12ಸಿಮೆಯೋನ್ ಕುಲದ ಕುಟುಂಬಗಳು:

ನೆಮೂವೇಲನ ಕುಟುಂಬದವರಾದ ನೆಮೂವೇ
ಲ್ಯರು; ಯಾಮೀನನ ಕುಟುಂಬದವರಾದ
ಯಾಮೀನ್ಯರು; ಯಾಕೀನನ ಕುಟುಂಬದವ
ರಾದ ಯಾಕೀನ್ಯರು;
13 ಜೆರಹನ ಕುಟುಂಬದವರಾದ ಜೆರಹಿಯರು;
ಸೌಲನ ಕುಟುಂಬದವರಾದ ಸೌಲ್ಯರು;

14 ಸಿಮೆಯೋನ್ ಕುಲದವರಾದ ಇವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 22,200.
15 ಗಾದ್ ಕುಲದ

ಚೆಫೋನನ ಕುಟುಂಬದವರಾದ ಚೆಫೋನ್ಯರು;
ಹಗ್ಗೀಯನ ಕುಟುಂಬದವರಾದ ಹಗ್ಗೀಯರು.
ಶೂನೀಯ ಕುಟುಂಬದವರಾದ ಶೂನೀಯರು;
16 ಒಜ್ನೀಯ ಕುಟುಂಬದವರಾದ ಒಜ್ನೀಯರು;
ಏರೀಯ ಕುಟುಂಬದವರಾದ ಏರೀಯರು;
17 ಆರೋದನ ಕುಟುಂಬದವರಾದ ಆರೋದ್ಯರು.
ಅರೇಲೀಯ ಕುಟುಂಬದವರಾದ ಅರೇಲೀ
ಯರು.

18 ಗಾದ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 40,500.
19-20 ಯೆಹೂದ ಕುಲದ ಕುಟುಂಬಗಳು:

ಶೇಲಹನ ಕುಟುಂಬದವರಾದ ಶೇಲಾನ್ಯರು;
ಪೆರೆಚನ ಕುಟುಂಬದವರಾದ ಪೆರೆಚ್ಯರು,
ಜೆರಹನ ಕುಟುಂಬದವರಾದ ಜೆರಹಿಯರು;
(ಯೆಹೂದನ ಇಬ್ಬರು ಗಂಡುಮಕ್ಕಳಾದ
ಏರ್ ಮತ್ತು ಓನಾನನು ಕಾನಾನ್‌ನಲ್ಲಿ
ಸತ್ತರು.)

21 ಪೆರೆಚನ ಕುಟುಂಬಗಳು:

ಹೆಚ್ರೋನನ ಕುಟುಂಬದವರಾದ ಹೆಚ್ರೋ
ನ್ಯರು, ಹಾಮೂಲನ ಕುಟುಂಬದವರಾದ
ಹಾಮೂಲ್ಯರು;

22 ಯೆಹೂದ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 76,500.
23 ಇಸ್ಸಾಕಾರನ ಕುಟುಂಬಗಳು:

ತೋಲನ ಕುಟುಂಬದವರಾದ ತೋಲಾಯರು.
ಪೂವ್ವನ ಕುಟುಂಬದವರಾದ ಪೂವ್ವರು.
24 ಯಾಶೂಬನ ಕುಟುಂಬದವರಾದ ಯಾಶೂ
ಬ್ಯರು. ಶಿಮ್ರೋನನ ಕುಟುಂಬದವರಾದ
ಶಿಮ್ರೋನ್ಯರು.

25 ಇಸ್ಸಾಕಾರ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 64,300 ಮಂದಿ.

26 ಜೆಬುಲೂನ್ ಕುಲದ ಕುಟುಂಬಗಳು:

ಸೆರೆದನ ಕುಟುಂಬದವರಾದ ಸೆರೆದ್ಯರು;
ಏಲೋನನ ಕುಟುಂಬದವರಾದ ಏಲೋ
ನ್ಯರು; ಯಹಲೇಲನ ಕುಟುಂಬದವರಾದ
ಯಹಲೇಲ್ಯರು.

27 ಜೆಬುಲೂನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ
ಒಟ್ಟು ಸಂಖ್ಯೆ 60,500 28 ಯೋಸೇಫನ ಇಬ್ಬರು ಗಂಡು
ಮಕ್ಕಳು: ಮನಸ್ಸೆ ಮತ್ತು ಎಫ್ರಾಯೀಮ್. 29 ಮನಸ್ಸೆ
ಕುಲದ ಕುಟುಂಬಗಳು:

ಮಾಕೀರನ ಕುಟುಂಬದವರಾದ ಮಾಕೀರ್ಯರು;
ಮಾಕೀರನ ಮಗನಾದ ಗಿಲ್ಯಾದನ ಕುಟುಂಬದವ
ರಾದ ಗಿಲ್ಯಾದ್ಯರು.
30 ಗಿಲ್ಯಾದನ ಕುಟುಂಬದವರು: ಈಯೆಜೆರನ
ಕುಟುಂಬದವರಾದ ಈಯೆಜೆರ್ಯರು; ಹೇಲೆ ಕನ
ಕುಟುಂಬದವರಾದ ಹೇಲೆಕ್ಯರು;
31 ಅಸ್ರೀಯೇಲನ ಕುಟುಂಬದವರಾದ ಅಸ್ರೀ
ಯೇಲ್ಯರು. ಶೆಕೆಮನ ಕುಟುಂಬದವರಾದ
ಶೆಕೆಮ್ಯರು.
32 ಶೆಮೀದಾಯನ ಕುಟುಂಬದವರಾದ ಶೆಮೀ
ದಾಯರು. ಹೇಫೆರನ ಕುಟುಂಬದವರಾದ
ಹೇಫೆರ್ಯರು.
33 ಹೇಫೆರನ ಮಗನಾದ ಚಲ್ಫಹಾದನಿಗೆ ಹೆಣ್ಣು
ಮಕ್ಕಳು ಮಾತ್ರ ಹುಟ್ಟಿದರು. ಗಂಡುಮಕ್ಕಳು
ಹುಟ್ಟಲಿಲ್ಲ. ಅವನ ಹೆಣ್ಣುಮಕ್ಕಳ ಹೆಸರು:
ಮಹ್ಲಾ, ನೋವಾ, ಹೊಗ್ಲಾ, ಮಿಲ್ಕಾ, ತಿರ್ಚಾ.

34 ಮನಸ್ಸೆ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 52,700.
35 ಎಫ್ರಾಯೀಮ್ ಕುಲದ ಕುಟುಂಬಗಳು:

ಶೂತೆಲಹನ ಕುಟುಂಬದವರಾದ ಶೂತೆಲ
ಹ್ಯರು; ಬೆಕೆರನ ಕುಟುಂಬದವರಾದ ಬೆಕೆರ್ಯರು;
ತಹನನ ಕುಟುಂಬದವರಾದ ತಹನಿಯರು;
36 ಶೂತೆಲಹನ ಮಗನಾದ ಏರಾನನ ಕುಟುಂಬ
ದವರಾದ ಏರಾನ್ಯರು;

37 ಎಫ್ರಾಯೀಮ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 32,500. ಇದೇ ಯೋಸೇಫನ ಕುಲದ ಕುಟುಂಬಗಳ ವಿವರ.

38 ಬೆನ್ಯಾಮೀನ್ ಕುಲದ ಕುಟುಂಬಗಳು:

ಬೆಲಗನ ಕುಟುಂಬದವರಾದ ಬೆಲಗ್ಯರು; ಅಷ್ಬೇಲನ ಕುಟುಂಬದವರಾದ ಅಷ್ಬೇಲ್ಯರು. ಅಹೀರಾಮನ ಕುಟುಂಬದವರಾದ ಅಹೀರಾಮ್ಯರು.
39 ಶೂಫಾಮನ ಕುಟುಂಬದವರಾದ ಶೂಫಾಮ್ಯರು. ಹೂಫಾಮನ ಕುಟುಂಬದವರಾದ ಹೂಫಾಮ್ಯರು.
40 ಬೆಲಗನಿಗೆ ಅರ್ದ್ ಮತ್ತು ನಾಮಾನ್ ಎಂಬ ಇಬ್ಬರು ಗಂಡು ಮಕ್ಕಳಿದ್ದರು. ಬೆಲಗನ ಕುಟುಂಬಗಳು: ಅರ್ದನ ಕುಟುಂಬದವರಾದ ಅರ್ದ್ಯರು. ನಾಮಾನನ ಕುಟುಂಬದವರಾದ ನಾಮಾನ್ಯರು.

41 ಬೆನ್ಯಾಮೀನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು
ಸಂಖ್ಯೆ 45,600.
42 ದಾನ್ ಕುಲದ ಕುಟುಂಬಗಳು:

ಶೂಹಾಮನ ಕುಟುಂಬದವರಾದ ಶೂಹಾಮ್ಯರು.

43 ದಾನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ
64,400.
44 ಆಶೇರ್ ಕುಲದ ಕುಟುಂಬಗಳು:

ಇಮ್ನಾಹನ ಕುಟುಂಬದವರಾದ ಇಮ್ನಾಹ್ಯರು; ಇಷ್ವೀಯ ಕುಟುಂಬದವರಾದ ಇಷ್ವೀಯರು; ಬೆರೀಯನ ಕುಟುಂಬದವರಾದ ಬೆರೀಯರು;

45 ಬೆರೀಯನ ಮಕ್ಕಳ ಕುಟುಂಬಗಳು:

ಹೇಬೆರನ ಕುಟುಂಬದವರಾದ ಹೇಬೆರ್ಯರು; ಮಲ್ಕೀಯೇಲನ ಕುಟುಂಬದವಾರದ ಮಲ್ಕೀಯೇಲ್ಯರು.

46 (ಆಶೇರನಿಗೆ ಸೆರಹ ಎಂಬ ಮಗಳೂ ಇದ್ದಳು.)
47 ಆಶೇರನ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ
53,400.
48 ನಫ್ತಾಲಿಯ ಕುಲದ ಕುಟುಂಬಗಳು:

ಯಹಚೇಲನ ಕುಟುಂಬದವರಾದ ಯಹಚೇಲ್ಯರು; ಗೂನೀಯ ಕುಟುಂಬದವರಾದ ಗೂನೀಯರು;
49 ಯೇಚೆರನ ಕುಟುಂಬದವರಾದ ಯೇಚೆರ್ಯರು; ಶಿಲ್ಲೇಮನ ಕುಟುಂಬದವರಾದ ಶಿಲ್ಲೇಮ್ಯರು.

50 ನಫ್ತಾಲಿಯ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು
ಸಂಖ್ಯೆ 45,400.
51 ಹೀಗೆ ಇಸ್ರೇಲರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ
6,01,730.
52 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
53 “ನೀವು ಈ ಕುಲಗಳಿಗೆ ಅವರವರ ಸಂಖ್ಯೆಯ ಪ್ರಕಾರ
ಆ ದೇಶವನ್ನು ಹಂಚಿಕೊಡಬೇಕು. 54 ಹೆಚ್ಚು ಮಂದಿ
ಯುಳ್ಳ ಕುಲಕ್ಕೆ ಹೆಚ್ಚಾಗಿಯೂ ಕಡಿಮೆಯಾದ ಕುಲಕ್ಕೆ
ಕಡಿಮೆಯಾಗಿಯೂ ಕೊಡಬೇಕು. ಲೆಕ್ಕಿಸಿದ ಸಂಖ್ಯೆಯ
ಪ್ರಕಾರವೇ ಪ್ರತಿಯೊಂದು ಕುಲಕ್ಕೆ ಭೂಮಿಯನ್ನು ಸ್ವಾಸ್ತ್ಯ
ಕ್ಕಾಗಿ ಕೊಡಬೇಕು. 55 ಪ್ರತಿಯೊಂದು ಕುಲದ ಪಿತೃವಿನ
ಹೆಸರನ್ನು ಬರೆದು ಚೀಟುಹಾಕಿ ಆಯಾ ಕುಲಕ್ಕೆ
ಸ್ವಾಸ್ತ್ಯವನ್ನು ಗೊತ್ತುಮಾಡಬೇಕು.
56 ಕುಲವು ದೊಡ್ಡದಾಗಿರಲೀ ಚಿಕ್ಕದಾಗಿರಲೀ ಚೀಟು
ಬಂದ ಪ್ರಕಾರವೇ ಸ್ವಾಸ್ತ್ಯವನ್ನು ಗೊತ್ತುಪಡಿಸಬೇಕು.”
57 ಲೇವಿಯರೊಳಗಿನ ಕುಲಗಳನ್ನು ಲೆಕ್ಕಿಸಲಾಗಿ,
ಅವರಲ್ಲಿನ ಕುಟುಂಬಗಳು:

ಗೇರ್ಷೋನನ ಕುಟುಂಬದವರಾದ ಗೇರ್ಷೋನ್ಯರು, ಕೆಹಾತನ ಕುಟುಂಬದವರಾದ ಕೆಹಾತ್ಯರು; ಮೆರಾರೀಯ ಕುಟುಂಬದವರಾದ ಮೆರಾರೀಯರು.

58 ಲೇವಿ ಕುಲದವರ ಕುಟುಂಬಗಳು:

ಲಿಬ್ನೀಯರ ಕುಟುಂಬ, ಹೆಬ್ರೋನ್ಯರ ಕುಟುಂಬ, ಮಹ್ಲೀಯರ ಕುಟುಂಬ, ಮೂಷೀಯರ ಕುಟುಂಬ, ಕೋರಹಿಯರ ಕುಟುಂಬ.

59 ಅಮ್ರಾಮನು ಕೆಹಾತನ ಕುಲಕ್ಕೆ ಸೇರಿದವನು.
ಅಮ್ರಾಮನ ಹೆಂಡತಿಯ ಹೆಸರು ಯೋಕೆಬೆದಳು.
ಅವಳು ಲೇವಿ ಕುಟುಂಬದವಳು. ಅವಳು ಈಜಿಪ್ಟಿನಲ್ಲಿ
ಹುಟ್ಟಿದಳು. ಅಮ್ರಾಮ್ ಮತ್ತು ಯೋಕೆಬೆದಳಿಗೆ
ಇಬ್ಬರು ಗಂಡುಮಕ್ಕಳು ಹುಟ್ಟಿದರು. ಅವರಾರೆಂದರೆ
ಆರೋನ ಮತ್ತು ಮೋಶೆ. ಅವರಿಗೆ ಒಬ್ಬ ಮಗಳೂ
ಇದ್ದಳು. ಅವಳ ಹೆಸರು ಮಿರ್ಯಾಮಳು.
60 ಆರೋನನು ನಾದಾಬ್, ಅಬೀಹೂ, ಎಲ್ಲಾಜಾರ್,
ಈತಾಮಾರ್ ಇವರ ತಂದೆ. 61 ಆದರೆ ನಾದಾಬ್ ಮತ್ತು

ಅಬೀಹೂ ಸತ್ತರು. ಯೆಹೋವನು ತಿಳಿಸದ ಹೊಸ
ಬೆಂಕಿಯಿಂದ ಧೂಪವನ್ನು ಯೆಹೋವನ ಮುಂದೆ
ಅರ್ಪಿಸಿದ್ದರಿಂದ ಅವರು ಸತ್ತರು.
62ಲೇವಿ ಕುಟುಂಬಗಳಲ್ಲಿ ಒಂದು ತಿಂಗಳು
ಮೊದಲುಗೊಂಡು ಹೆಚ್ಚು ವಯಸ್ಸಾದ ಪುರುಷರ ಒಟ್ಟು
ಸಂಖ್ಯೆ 23,000. ಆದರೆ ಈ ಜನರು ಇತರ ಇಸ್ರೇಲ
ರೊಡನೆ ಲೆಕ್ಕಿಸಲ್ಪಡಲಿಲ್ಲ. ಯೆಹೋವನು ಬೇರೆ ಇಸ್ರೇಲ
ರಿಗೆ ಕೊಟ್ಟ ಸ್ವಾಸ್ತ್ಯದಲ್ಲಿ ಅವರಿಗೆ ಪಾಲು ಸಿಕ್ಕಲಿಲ್ಲ.
63ಮೋಶೆ ಮತ್ತು ಯಾಜಕನಾದ ಎಲ್ಲಾಜಾರನು ಈ
ಜನರನ್ನೆಲ್ಲಾ ಲೆಕ್ಕಿಸಿದರು. ಇಸ್ರೇಲರು ಜೋರ್ಡನ್
ಹೊಳೆಯ ತೀರದಲ್ಲಿ ಜೆರಿಕೋ ಪಟ್ಟಣದ ಆಚೆಯಲ್ಲಿ
ಮೋವಾಬ್ಯರ ಬಯಲುಗಳಲ್ಲಿದ್ದಾಗ ಇವರನ್ನು ಲೆಕ್ಕಿಸಿ
ದರು. 64ಮೋಶೆಯೂ ಯಾಜಕನಾದ ಆರೋನನೂ
ಸೀನಾಯಿ ಮರುಭೂಮಿಯಲ್ಲಿ ಇಸ್ರೇಲರ ಸಂಖ್ಯೆಯನ್ನು
ನೋಡಿದಾಗ ಲೆಕ್ಕಿಸಲ್ಪಟ್ಟವರೊಳಗೆ ಒಬ್ಬರಾದರೂ
ಇವರಲ್ಲಿ ಇರಲಿಲ್ಲ. 65ಯೆಹೋವನು ಅವರೆಲ್ಲರೂ
ಮರುಭೂಮಿಯಲ್ಲಿಯೇ ಸಾಯುವರೆಂದು ಹೇಳಿದ್ದನು.
ಆದುದರಿಂದ ಯೆಫುನ್ನೆಯ ಮಗನಾದ ಕಾಲೇಬ್ ಮತ್ತು
ನೂನನ ಮಗನಾದ ಯೆಹೋಶುವ ಇವರಿಬ್ಬರ ಹೊರ
ತಾಗಿ ಅವರಲ್ಲಿ ಯಾರೂ ಉಳಿಯಲಿಲ್ಲ.

## ಚಲ್ಪಹಾದನ ಹೆಣ್ಣುಮಕ್ಕಳು

27 ಚಲ್ಪಹಾದನು ಹೇಫೆರನ ಮಗನು. ಹೇಫೆರನು
ಗಿಲ್ಯಾದನ ಮಗನು. ಗಿಲ್ಯಾದನು ಮಾಕೀರನ
ಮಗನು. ಮಾಕೀರನು ಮನಸ್ಸೆಯ ಮಗನು. ಮನಸ್ಸೆಯು
ಯೋಸೇಫನ ಮಗನು. ಚಲ್ಪಹಾದನಿಗೆ ಐದು ಮಂದಿ
ಹೆಣ್ಣುಮಕ್ಕಳಿದ್ದರು. ಅವರು ಯಾರೆಂದರೆ: ಮಹ್ಲಾ,
ನೋವಾ, ಹೊಗ್ಲಾ, ಮಿಲ್ಕಾ ಮತ್ತು ತಿರ್ಚಾ. 2ಈ ಐದು
ಮಂದಿ ಸ್ತ್ರೀಯರು ದೇವದರ್ಶನಗುಡಾರದ ಪ್ರವೇಶ
ದ್ವಾರದ ಬಳಿಗೆ ಹೋಗಿ ಮೋಶೆಯ, ಯಾಜಕನಾದ
ಎಲ್ಲಾಜಾರನ, ನಾಯಕರ ಮತ್ತು ಎಲ್ಲಾ ಇಸ್ರೇಲರ
ಮುಂದೆ ನಿಂತರು.
3ಈ ಐದು ಹೆಣ್ಣುಮಕ್ಕಳು, ''ನಮ್ಮ ತಂದೆ ಮರು
ಭೂಮಿಯಲ್ಲಿ ಸತ್ತುಹೋದನು. ಅವನು ಕೋರಹನ
ಜೊತೆಯಲ್ಲಿ ಯೆಹೋವನಿಗೆ ವಿರೋಧವಾಗಿ ತಿರುಗಿ
ಬಿದ್ದವರಲ್ಲಿ ಸೇರಿದವನಲ್ಲ. ನಮ್ಮ ತಂದೆಯು ತನ್ನ ಪಾಪದ
ಫಲವಾಗಿ ಸತ್ತನು. ಅವನಿಗೆ ಗಂಡುಮಕ್ಕಳಿರಲಿಲ್ಲ. 4ನಮ್ಮ
ತಂದೆಗೆ ಗಂಡುಮಗನಿಲ್ಲದ ಮಾತ್ರದಿಂದ ಅವನ
ಹೆಸರನ್ನು ಅವನ ಕುಲದವರ ಮಧ್ಯದಿಂದ ತೆಗೆಯುವುದು
ನ್ಯಾಯವೋ? ನಮ್ಮ ತಂದೆಯ ಸಂಬಂಧಿಕರೊಡನೆ
ನಮಗೂ ಸ್ವಾಸ್ತ್ಯವನ್ನು ಕೊಡು'' ಎಂದು ಹೇಳಿದರು.
5ಮೋಶೆಯು ಇದರ ವಿಷಯದಲ್ಲಿ ತಾನು ಏನು ಮಾಡ
ಬೇಕೆಂದು ಯೆಹೋವನ ಸನ್ನಿಧಿಯಲ್ಲಿ ವಿಚಾರಿಸಲಾಗಿ,
6ಯೆಹೋವನು ಅವನಿಗೆ ಹೇಳಿದ್ದೇನೆಂದರೆ,
7''ಚಲ್ಪಹಾದನ ಹೆಣ್ಣುಮಕ್ಕಳು ಹೇಳುವುದು ನ್ಯಾಯ
ವಾಗಿದೆ. ಅವರ ತಂದೆಯ ಸಂಬಂಧಿಕರೊಡನೆ ಅವರಿಗೂ
ನೀನು ಸ್ವಾಸ್ತ್ಯವನ್ನು ಕೊಡಬೇಕು. ಅವರ ತಂದೆಯ
ಸ್ವಾಸ್ತ್ಯವನ್ನು ನೀನು ಅವರಿಗೆ ವರ್ಗಾವಣೆ ಮಾಡಬೇಕು.
8''ಮತ್ತು ನೀನು ಇಸ್ರೇಲರಿಗ ಹೀಗೆ ಅಪ್ಪಣೆ ಕೊಡ
ಬೇಕು: 'ಒಬ್ಬ ಮನುಷ್ಯನು ಮಗನಿಲ್ಲದೆ ಸತ್ತರೆ, ನೀವು
ಅವನ ಸ್ವಾಸ್ತ್ಯವನ್ನು ಅವನ ಮಗಳಿಗೆ ವರ್ಗಾವಣೆ
ಮಾಡಬೇಕು. 9-10ಮಗಳು ಇಲ್ಲದ ಪಕ್ಷಕ್ಕೆ ಅವನ ಸ್ವಾಸ್ತ್ಯ
ವನ್ನು ಅವನ ಅಣ್ಣತಮ್ಮಂದಿರಿಗೆ ಕೊಡಬೇಕು. ಅಣ್ಣ
ತಮ್ಮಂದಿರು ಇಲ್ಲದ ಪಕ್ಷಕ್ಕೆ ಅವನ ಸ್ವಾಸ್ತ್ಯವನ್ನು ಅವನ
ತಂದೆಯ ಸಹೋದರರಿಗೆ ಕೊಡಬೇಕು. 11ಅವನ ತಂದೆಗೆ
ಸಹೋದರರಿಲ್ಲದಿದ್ದರೆ, ಅವನ ಸ್ವಂತ ಕುಲದ ಅತಿ
ಸಮೀಪದ ಸಂಬಂಧಿಕನಿಗೆ ಅದನ್ನು ವಹಿಸಿಕೊಡಬೇಕು.
ಆಗ ಅವನು ಅದನ್ನು ಸ್ವಾಧೀನಪಡಿಸಿಕೊಳ್ಳುವನು.
ಯೆಹೋವನು ಮೋಶೆಗೆ ಆಜ್ಞಾಪಿಸಿದ ಈ ನಿರ್ಧಾರವು
ಇಸ್ರೇಲರಿಗೆ ಕಾನೂನುಬದ್ಧವಾದ ವಿಧಿಯಾಗಿದೆ.''

## ಯೆಹೋಶುವನು ನೂತನ ನಾಯಕ

12ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
''ಅಬಾರೀಮ್* ಪರ್ವತ ಶ್ರೇಣಿಯಲ್ಲಿರುವ ಈ ಬೆಟ್ಟ
ವನ್ನು ಹತ್ತು. ನಾನು ಇಸ್ರೇಲರಿಗೆ ಕೊಡಲಿಕ್ಕಿರುವ ದೇಶ
ವನ್ನು ನೀನು ಅಲ್ಲಿಂದ ನೋಡು. 13ಆ ದೇಶವನ್ನು
ನೋಡಿದ ನಂತರ ನಿನ್ನ ಅಣ್ಣನಾದ ಆರೋನನಂತೆ
ನೀನೂ ಸಾಯುವೆ. 14ಇಸ್ರೇಲರ ಸಮೂಹದವರು ಚಿನ್
ಮರುಭೂಮಿಯಲ್ಲಿ ನನ್ನೊಡನೆ ವಿವಾದಿಸಿದಾಗ
ನೀವಿಬ್ಬರೂ ನನ್ನ ಪವಿತ್ರತೆಯನ್ನು ಜನರ ಮುಂದೆ
ತೋರಿಸದೆ ನನ್ನ ಆಜ್ಞೆಗೆ ಅವಿಧೇಯರಾದ ಕಾರಣ ಆ
ದೇಶವನ್ನು ನೀನು ಸೇರಬಾರದು.'' ಚಿನ್ ಮರು
ಭೂಮಿಯಲ್ಲಿ ಕಾದೇಶಿನ ಬಳಿ ಮೆರೀಬಾ ಬುಗ್ಗೆಯ
ಕುರಿತಾಗಿ ಯೆಹೋವನು ಇದನ್ನು ಹೇಳಿದನು.
15ಆಗ ಮೋಶೆಯು ಯೆಹೋವನಿಗೆ, 16''ಎಲ್ಲಾ
ಮನುಷ್ಯರ ಯೋಚನೆಗಳನ್ನು ತಿಳಿದಿರುವ ದೇವರಾದ
ಯೆಹೋವನು ಈ ಸಮೂಹಕ್ಕೆ ಒಬ್ಬ ನಾಯಕನನ್ನು
ನೇಮಿಸಲಿ. 17ಅವನು ಅವರನ್ನು ಯುದ್ಧದಲ್ಲಿ ಮುನ್ನಡೆ
ಸುವವನೂ ಸೈನ್ಯದ ಯೋಜನೆಗಳನ್ನು ರೂಪಿಸುವವನೂ
ಆಗಿರಲಿ. ಆಗ ಯೆಹೋವನ ಸಮೂಹವು ಕುರುಬನಿಲ್ಲದ
ಕುರಿಯಂತಾಗುವುದಿಲ್ಲ.''

---

**ಅಬಾರೀಮ್** ಈ ಪರ್ವತಗಳು ಜೋರ್ಡನ್ ನದಿಯ ಪೂರ್ವ
ದಿಕ್ಕಿನಲ್ಲಿದ್ದ ಮರುಭೂಮಿಯಲ್ಲಿದ್ದವು.

[18]ಅದಕ್ಕೆ ಯೆಹೋವನು, ''ನೂನನ ಮಗನಾದ
ಯೆಹೋಶುವನು ಹೊಸ ನಾಯಕನಾಗಿರುವನು. ಅವನು
ಧೈರ್ಯವಂತನು. ಅವನನ್ನು ಹೊಸ ನಾಯಕನನ್ನಾಗಿ
ಮಾಡಲು ಅವನ ಮೇಲೆ ನಿನ್ನ ಕೈಯನ್ನು ಇಡು.
[19]ಯಾಜಕನಾದ ಎಲ್ಲಾಜಾರನ ಮುಂದೆಯೂ ಸಮಸ್ತ
ಇಸ್ರೇಲರ ಮುಂದೆಯೂ ಅವನನ್ನು ನಿಲ್ಲಿಸು. ಅವರ
ಎದುರಿನಲ್ಲಿಯೇ ಅವನಿಗೆ ಆದೇಶಗಳನ್ನು ಕೊಡು.
[20]''ಇಸ್ರೇಲರ ಇಡೀ ಸಮುದಾಯವು ವಿಧೇಯ
ರಾಗುವಂತೆ ನಿನ್ನ ಅಧಿಕಾರಗಳಲ್ಲಿ ಸ್ವಲ್ಪವನ್ನು ಅವನಿಗೆ
ಕೊಡು. [21]ಯೆಹೋಶುವನು ತೀರ್ಮಾನವೇನಾದರೂ
ಮಾಡಬೇಕಾದರೆ ಅವನು ಯಾಜಕನಾದ ಎಲ್ಲಾಜಾರನ
ಬಳಿಗೆ ಹೋಗಲಿ, ಎಲ್ಲಾಜಾರನು ಊರೀಮಿನಿಂದ
ಯೆಹೋವನ ಉತ್ತರವನ್ನು ಪಡೆಯುವನು. ಆಗ
ಯೆಹೋಶುವನೂ ಇಸ್ರೇಲರೆಲ್ಲರೂ ದೇವರು ಹೇಳುವ
ಕಾರ್ಯಗಳನ್ನು ಮಾಡುವರು. ಆತನು ''ಯುದ್ಧಕ್ಕೆ
ಹೋಗಿರಿ' ಎಂದು ಹೇಳಿದರೆ ಅವರು ಯುದ್ಧಕ್ಕೆ
ಹೋಗುವರು. ಆತನು 'ಮನೆಗೆ ಹೋಗಿರಿ' ಎಂದು
ಹೇಳಿದರೆ ಅವರು ಮನೆಗೆ ಹೋಗುವರು'' ಎಂದು
ಹೇಳಿದನು. [22]ಮೋಶೆಯು ಯೆಹೋವನಿಗೆ ವಿಧೇಯ
ನಾಗಿ ಯೆಹೋಶುವನನ್ನು ಯಾಜಕನಾದ ಎಲ್ಲಾಜಾರನ
ಮುಂದೆಯೂ ಸಮಸ್ತ ಇಸ್ರೇಲರ ಮುಂದೆಯೂ
ನಿಲ್ಲಿಸಿದನು. [23]ಬಳಿಕ ಮೋಶೆಯು ತನ್ನ ಕೈಯನ್ನು ಅವನ
ಮೇಲಿಟ್ಟು ಹೊಸನಾಯಕನಿಗೆ ಕೊಡತಕ್ಕ ಆದೇಶಗಳನ್ನು
ಕೊಟ್ಟನು. ಯೆಹೋವನು ಆಜ್ಞಾಪಿಸಿದಂತೆ ಅವನು
ಇದನ್ನು ಮಾಡಿದನು.

### ದಿನಂಪ್ರತಿ ಸಲ್ಲಿಸತಕ್ಕ ಅರ್ಪಣೆಗಳು

28 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[2]''ನೀನು ಇಸ್ರೇಲರಿಗೆ ಈ ಆಜ್ಞೆಯನ್ನು ಕೊಡು.
ನೀವು ಎಚ್ಚರಿಕೆಯಾಗಿದ್ದು ನೇಮಿತ ಕಾಲಗಳಲ್ಲಿ ನನಗೆ
ಅರ್ಪಿಸತಕ್ಕ ಧಾನ್ಯಸಮರ್ಪಣೆಗಳನ್ನು ನನಗೆ ಸುಗಂಧ
ಹೋಮ ಮಾಡಬೇಕು. [3]ಅವರಿಗೆ ಹೀಗೆ ಹೇಳು: ನೀವು
ಯೆಹೋವನಿಗೆ ಕೊಡಬೇಕಾಗಿರುವ ತ್ಯಾಗಮಯವಾದ
ಕಾಣಿಕೆಗಳು ಇವುಗಳೇ: ದಿನನಿತ್ಯದ ಸರ್ವಾಂಗಹೋಮ
ಕ್ಕಾಗಿ ಒಂದು ವರ್ಷ ವಯಸ್ಸಿನ ಎರಡು ಗಂಡುಕುರಿಗಳು.
[4]ನೀವು ಒಂದು ಕುರಿಮರಿಯನ್ನು ಹೊತ್ತಾರೆಯಲ್ಲಿಯೂ
ಇನ್ನೊಂದನ್ನು ನಸುಸಂಜೆಯಲ್ಲಿಯೂ ಅರ್ಪಿಸಬೇಕು.
[5]ಹೊತ್ತಾರೆಯ ಸಮರ್ಪಣೆಯೊಂದಿಗೆ ನೀವು ಧಾನ್ಯ
ಸಮರ್ಪಣೆಗಾಗಿ ಒಂದುವರೆ ಸೇರು ಶ್ರೇಷ್ಠವಾದ ಎಣ್ಣೆ
ಯನ್ನೂ ಮೂರು ಸೇರು ಗೋಧಿಹಿಟ್ಟನ್ನೂ ಬೆರೆಸಿ
ಸಮರ್ಪಿಸಬೇಕು.'' [6](ಈ ಸರ್ವಾಂಗಹೋಮವನ್ನು
ಸೀನಾಯಿ ಬೆಟ್ಟದ ಮೇಲೆ ಯೆಹೋವನಿಗೆ ತ್ಯಾಗಮಯ
ವಾದ ಕಾಣಿಕೆಯಾಗಿಯೂ ಸುಗಂಧವಾಸನೆಯಾಗಿಯೂ
ಕ್ರಮವಾಗಿ ಅರ್ಪಿಸಲಾಯಿತು.) [7]''ಪ್ರತಿಯೊಂದು
ಕುರಿಮರಿಯೊಂದಿಗೆ ಒಂದುವರೆ ಸೇರು ದ್ರಾಕ್ಷಾರಸವನ್ನು
ಪಾನದ್ರವ್ಯದ ಕಾಣಿಕೆಯಾಗಿ ಅರ್ಪಿಸಬೇಕು. ಯೆಹೋವ
ನಿಗೆ ಪಾನದ್ರವ್ಯವಾಗಿ ಅರ್ಪಿಸತಕ್ಕ ದ್ರಾಕ್ಷಾರಸವನ್ನು
ಪವಿತ್ರಸ್ಥಳದಲ್ಲಿ ಸುರಿಯಿರಿ. [8]ನೀವು ಎರಡನೆ ಕುರಿಮರಿ
ಯನ್ನು ನಸುಸಂಜೆಯಲ್ಲಿ ಅರ್ಪಿಸುವಾಗ, ಮುಂಜಾನೆ
ಯಲ್ಲಿ ಅರ್ಪಿಸಿದಂತೆಯೇ ಅದರೊಡನೆ ಸಮರ್ಪಕವಾದ
ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾರ್ಪಣೆಯನ್ನು
ಮಾಡಬೇಕು. ಇದು ಯೆಹೋವನಿಗೆ ತ್ಯಾಗಮಯವಾದ
ಅರ್ಪಣೆಯಾಗಿದ್ದು ಸುಗಂಧವಾಸನೆಯನ್ನು ಉಂಟು
ಮಾಡುವುದು.''

### ಸಬ್ಬತ್ತಿನ ಸಮರ್ಪಣೆಗಳು

[9-10]ಸಬ್ಬತ್ ದಿನದಲ್ಲಿ ಎರಡು ಪೂರ್ಣಾಂಗವಾದ
ಒಂದು ವರುಷದ ಗಂಡುಕುರಿಗಳನ್ನೂ ಧಾನ್ಯ
ದ್ರವ್ಯಾರ್ಪಣೆಗಾಗಿ ಎಣ್ಣೆ ಬರೆಸಿದ ಆರು ಸೇರು ಗೋಧಿ
ಹಿಟ್ಟನ್ನೂ ಅದಕ್ಕೆ ತಕ್ಕ ಪಾನದ್ರವ್ಯವನ್ನೂ ಸಮರ್ಪಿಸ
ಬೇಕು. ಕ್ರಮವಾಗಿ ಅರ್ಪಿಸತಕ್ಕ ಸರ್ವಾಂಗಹೋಮ
ಮತ್ತು ಅದರ ಪಾನದ್ರವ್ಯಾರ್ಪಣೆಗಳಲ್ಲದೆ, ಪ್ರತಿ
ಸಬ್ಬತ್ ದಿನ ಸರ್ವಾಂಗಹೋಮವನ್ನು ಅರ್ಪಿಸಬೇಕು.''

### ತಿಂಗಳ ಯಜ್ಞಗಳು

[11]''ಪ್ರತಿ ತಿಂಗಳ ಮೊದಲನೆಯ ದಿನದಲ್ಲಿ, ನೀವು
ಯೆಹೋವನಿಗೆ ಸರ್ವಾಂಗಹೋಮವನ್ನು ಅರ್ಪಿಸ
ಬೇಕು: ಎರಡು ಹೋರಿಗಳು, ಒಂದು ಟಗರು ಮತ್ತು
ಒಂದು ವರುಷದ ಏಳು ಕುರಿಮರಿಗಳು. ಇವುಗಳೆಲ್ಲಾ
ಪೂರ್ಣಾಂಗವಾದವುಗಳಾಗಿರಬೇಕು. [12]ಇವುಗಳೊಡನೆ
ಧಾನ್ಯನೈವೇದ್ಯಕ್ಕಾಗಿ ನೀವು ಪ್ರತಿಯೊಂದು ಹೋರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಒಂಭತ್ತು ಸೇರು
ಗೋಧಿಹಿಟ್ಟನ್ನು ಅರ್ಪಿಸಬೇಕು. ಪ್ರತಿಯೊಂದು ಟಗರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಆರು ಸೇರು ಗೋಧಿ
ಹಿಟ್ಟನ್ನು ಅರ್ಪಿಸಬೇಕು. [13]ಪ್ರತಿಯೊಂದು ಕುರಿಮರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಮೂರು ಸೇರು ಗೋಧಿ
ಹಿಟ್ಟನ್ನು ಅರ್ಪಿಸಬೇಕು. ಈ ಸರ್ವಾಂಗಹೋಮವು
ಯೆಹೋವನಿಗೆ ಸುಗಂಧ ವಾಸನೆಯಾಗಿಯೂ ತ್ಯಾಗ
ಮಯವಾದ ಕಾಣಿಕೆಯಾಗಿಯೂ ಇದೆ. [14]ಇವುಗಳಿಗೆ ತಕ್ಕ
ಪಾನದ್ರವ್ಯಾರ್ಪಣೆಗಳನ್ನು ಮಾಡಬೇಕು. ಅವು ಯಾವು
ವೆಂದರೆ: ಒಂದು ಹೋರಿಯೊಡನೆ ಮೂರು ಸೇರು
ದ್ರಾಕ್ಷಾರಸವನ್ನೂ ಟಗರಿನೊಡನೆ ಎರಡು ಸೇರು
ದ್ರಾಕ್ಷಾರಸವನ್ನೂ ಕುರಿಮರಿಯೊಡನೆ ಒಂದುವರೆ ಸೇರು
ದ್ರಾಕ್ಷಾರಸವನ್ನೂ ಅರ್ಪಿಸಬೇಕು. ವರ್ಷದ ಪ್ರತಿತಿಂಗಳು

ಅಮಾವಾಸ್ಯೆಯಲ್ಲಿ ಅರ್ಪಿಸತಕ್ಕ ಮಾಸಿಕ ಸರ್ವಾಂಗ
ಹೋಮಗಳು ಇವುಗಳೇ. [15]ಕ್ರಮಾನುಸಾರವಾದ
ಸರ್ವಾಂಗಹೋಮ ಮತ್ತು ಅದರ ಪಾನದ್ರವ್ಯಾರ್ಪಣೆ
ಗಳಲ್ಲದೆ, ಪಾಪಪರಿಹಾರಕ ಯಜ್ಞವಾಗಿ ಒಂದು
ಹೋತವನ್ನು ಯೆಹೋವನಿಗೆ ಅರ್ಪಿಸಬೇಕು.

### ಪಸ್ಕಹಬ್ಬ

[16]“ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನ
ದಲ್ಲಿ ಯೆಹೋವನಿಗೆ ಪಸ್ಕಹಬ್ಬದ ಯಜ್ಞವನ್ನು ಅರ್ಪಿಸ
ಬೇಕು. [17]ಹುಳಿಯಿಲ್ಲದ ರೊಟ್ಟಿಯ ಹಬ್ಬವು ಅದೇ
ತಿಂಗಳಿನ ಹದಿನೈದನೆಯ ದಿನದಿಂದ ಪ್ರಾರಂಭ
ವಾಗುವುದು. ಏಳು ದಿನಗಳವರೆಗೂ ಹುಳಿಯಿಲ್ಲದ
ರೊಟ್ಟಿಯನ್ನೇ ಊಟಮಾಡಬೇಕು. [18]ಮೊದಲನೆಯ
ದಿನದಲ್ಲಿ ದೇವಾರಾಧನೆಗಾಗಿ ಸಭೆಸೇರಬೇಕು. ಆ ದಿನ
ದಲ್ಲಿ ಯಾವ ಪ್ರಯಾಸದ ಕೆಲಸವನ್ನು ಮಾಡಬಾರದು.
[19]ಯೆಹೋವನಿಗೆ ಸರ್ವಾಂಗಹೋಮಕ್ಕಾಗಿ ಎರಡು
ಹೋರಿಗಳನ್ನು, ಒಂದು ಟಗರನ್ನು ಮತ್ತು ಒಂದು
ವರುಷದ ಏಳು ಗಂಡುಕುರಿಮರಿಗಳನ್ನು ಅರ್ಪಿಸಬೇಕು.
ಈ ಪಶುಗಳೆಲ್ಲ ಪೂರ್ಣಾಂಗವಾದವುಗಳಾಗಿರಬೇಕು.
[20]ಇವುಗಳೊಂದಿಗೆ ಧಾನ್ಯಸಮರ್ಪಣೆಗಾಗಿ ಎಣ್ಣೆ ಬೆರೆಸಿದ
ಗೋಧಿಹಿಟ್ಟನ್ನು ತಂದುಕೊಡಬೇಕು; ಹೇಗೆಂದರೆ,
ಒಂದು ಹೋರಿಗೆ ಒಂಭತ್ತು ಸೇರು ಗೋಧಿಹಿಟ್ಟು,
ಒಂದು ಟಗರಿಗೆ ಆರು ಸೇರು ಗೋಧಿಹಿಟ್ಟು, [21]ಏಳು
ಕುರಿಮರಿಗಳಲ್ಲಿ ಪ್ರತಿಯೊಂದಕ್ಕೂ ಮೂರು ಸೇರು
ಗೋಧಿಹಿಟ್ಟು. [22]ಇದಲ್ಲದೆ ನಿಮಗೋಸ್ಕರ ಪ್ರಾಯಶ್ಚಿತ್ತ
ಮಾಡಲು ಒಂದು ಹೋತವನ್ನು ಪಾಪಪರಿಹಾರಕ
ಯಜ್ಞವಾಗಿ ಅರ್ಪಿಸಬೇಕು. [23]ಕ್ರಮವಾಗಿ ಮುಂಜಾನೆ
ಅರ್ಪಿಸುವ ಸರ್ವಾಂಗಹೋಮವಲ್ಲದೆ ಇವುಗಳನ್ನೂ
ಅರ್ಪಿಸಬೇಕು.

[24]“ಈ ಎಲ್ಲ ಅರ್ಪಣೆಗಳನ್ನು ಆ ಏಳು ದಿನಗಳಲ್ಲಿ ಪ್ರತಿ
ಯೊಂದು ದಿನವೂ ಆಹಾರವಾಗಿಯೂ ತ್ಯಾಗಮಯ
ವಾದ ಕಾಣಿಕೆಯಾಗಿಯೂ ಯೆಹೋವನಿಗೆ ಸುಗಂಧ
ವಾಸನೆಯಾಗಿಯೂ ಅರ್ಪಿಸಬೇಕು. ಕ್ರಮಾನುಸಾರ
ವಾದ ಸರ್ವಾಂಗಹೋಮ ಮತ್ತು ಅದರ ಪಾನದ್ರವ್ಯಾ
ರ್ಪಣೆಗಳಲ್ಲದೆ ಇವುಗಳನ್ನೂ ಅರ್ಪಿಸಬೇಕು.

[25]“ಇದಲ್ಲದೆ ಏಳನೆಯ ದಿನದಲ್ಲಿ ನೀವು ಪವಿತ್ರ
ಸಭಾಕೂಟವನ್ನು ಹೊಂದಿರುವಿರಿ. ಆ ದಿನದಲ್ಲಿ ನೀವು
ಪ್ರಯಾಸದ ಕೆಲಸವನ್ನು ಮಾಡಕೂಡದು.

### ವಾರಗಳ ಹಬ್ಬ (ಪಂಚಾಶತ್ತಮ)

[26]“ನಿಮ್ಮ ಪ್ರಥಮಫಲಗಳ ಹಬ್ಬದಲ್ಲಿ ಅಂದರೆ ವಾರ
ಗಳ ಹಬ್ಬದಲ್ಲಿ ನೀವು ಹೊಸದಾಗಿ ಬೆಳೆದ ಗೋಧಿಯನ್ನು
ಯೆಹೋವನಿಗೆ ಅರ್ಪಿಸುವಾಗ, ದೇವರನ್ನು ಆರಾಧಿಸಲು
ನೀವು ಸಭೆಸೇರಬೇಕು. ನೀವು ಯಾವ ಪ್ರಯಾಸದ
ಕೆಲಸವನ್ನೂ ಮಾಡಬಾರದು. [27]ಆ ದಿನದಲ್ಲಿ ಎರಡು
ಹೋರಿಗಳನ್ನು, ಒಂದು ಟಗರನ್ನು ಮತ್ತು ಒಂದು
ವರ್ಷದ ಏಳು ಗಂಡುಕುರಿಮರಿಗಳನ್ನು ಯೆಹೋವನಿಗೆ
ಸುಗಂಧವಾಸನೆಯಾಗಿರುವ ಸರ್ವಾಂಗಹೋಮವಾಗಿ
ಅರ್ಪಿಸಬೇಕು. [28]ಇವುಗಳೊಂದಿಗೆ ಧಾನ್ಯಸಮರ್ಪಣೆ
ಗಾಗಿ ಎಣ್ಣೆಬೆರೆಸಿದ ಗೋಧಿಹಿಟ್ಟನ್ನು ಪ್ರತಿಯೊಂದು
ಹೋರಿಗೆ ಒಂಭತ್ತು ಸೇರು, [29]ಟಗರಿಗೆ ಆರು ಸೇರು
ಮತ್ತು ಪ್ರತಿಯೊಂದು ಕುರಿಗೆ ಮೂರು ಸೇರು ಈ ಮೇರೆಗೆ
ಸಮರ್ಪಿಸಬೇಕು. [30]ನಿಮಗೋಸ್ಕರ ಪ್ರಾಯಶ್ಚಿತ್ತ
ಮಾಡಲು ಒಂದು ಹೋತವನ್ನೂ ಪಾಪಪರಿಹಾರಕ
ಯಜ್ಞವಾಗಿ ಅರ್ಪಿಸಬೇಕು.

[31]ಈ ಪಶುಗಳೆಲ್ಲಾ ಪೂರ್ಣಾಂಗವಾದವುಗಳಾಗಿರ
ಬೇಕು. ಕ್ರಮಾನುಸಾರವಾದ ಸರ್ವಾಂಗಹೋಮ ಮತ್ತು
ಅದರ ಧಾನ್ಯಾರ್ಪಣೆಗಳಲ್ಲದೆ ಈ ಯಜ್ಞಗಳನ್ನು ಮತ್ತು
ಅವುಗಳೊಡನೆ ಪಾನ ದ್ರವ್ಯಾರ್ಪಣೆಗಳನ್ನು ಅರ್ಪಿಸ
ಬೇಕು. ನೀವು ಸಮರ್ಪಿಸುವ ಪಶುಗಳಲ್ಲಿಯೂ ಅಥವಾ
ಪಾನದ್ರವ್ಯ ಸಮರ್ಪಣೆಗಳಲ್ಲಿಯೂ ಯಾವ ದೋಷವೂ
ಇರಬಾರದು.

### ತುತ್ತೂರಿಗಳ ಹಬ್ಬ

29 “ಏಳನೆಯ ತಿಂಗಳಿನ ಮೊದಲನೆ ದಿನದಲ್ಲಿ
ವಿಶೇಷ ಸಭೆಸೇರಬೇಕು. ಆ ದಿನದಲ್ಲಿ ನೀವು
ಯಾವ ಪ್ರಯಾಸದ ಕೆಲಸವನ್ನೂ ಮಾಡಬಾರದು. ಅದು
ತುತ್ತೂರಿಗಳ ಧ್ವನಿಯಿಂದ ಪ್ರಕಟವಾಗುವ ದಿನವಾಗಿದೆ.
[2]ಅದರಲ್ಲಿ ನೀವು ಯೆಹೋವನಿಗೆ ಸುಗಂಧಕರವಾದ
ಸರ್ವಾಂಗಹೋಮಕ್ಕಾಗಿ ಒಂದು ಹೋರಿಯನ್ನೂ
ಒಂದು ಟಗರನ್ನೂ ಒಂದು ವರುಷದ ಏಳು ಕುರಿ ಮರಿ
ಗಳನ್ನೂ ಸಮರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗ
ವಾದವುಗಳಾಗಿರಬೇಕು. [3]ಇವುಗಳೊಡನೆ ಧಾನ್ಯ
ಸಮರ್ಪಣೆಗಾಗಿ ಹೋರಿಗೆ ಒಂಭತ್ತು ಸೇರು, ಟಗರಿಗೆ
ಆರು ಸೇರು ಮತ್ತು [4]ಪ್ರತಿಯೊಂದು ಕುರಿಮರಿಗೆ ಮೂರು
ಸೇರು, ಈ ಮೇರೆಗೆ ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು
ಸಮರ್ಪಿಸಬೇಕು. [5]ಪಾಪಪರಿಹಾರಕ ಯಜ್ಞಕ್ಕಾಗಿ ಒಂದು
ಹೋತವನ್ನು ಅರ್ಪಿಸಬೇಕು. [6]ಅಮಾವಾಸ್ಯೆಯಲ್ಲಿ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಕ್ರಮವಾಗಿ ಪ್ರತಿನಿತ್ಯ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆ ಇವು
ಗಳಲ್ಲದೆ ಈ ಅರ್ಪಣೆಗಳನ್ನು ಅರ್ಪಿಸಬೇಕು. ಇವುಗಳನ್ನು
ನಿಯಮಗಳ ಪ್ರಕಾರವಾಗಿ ಮಾಡಬೇಕು. ಅವು

ಯೆಹೋವನಿಗೆ ಸುಗಂಧ ವಾಸನೆಯಾಗಿಯೂ ತ್ಯಾಗ
ಮಯವಾದ ಕಾಣಿಕೆಯಾಗಿಯೂ ಇವೆ.

### ದೋಷಪರಿಹಾರಕ ದಿನ

7 ''ಏಳನೆಯ ತಿಂಗಳಿನ ಹತ್ತನೆಯ ದಿನದಲ್ಲಿ ವಿಶೇಷ
ಸಭೆ ಸೇರಬೇಕು. ಆ ದಿನದಲ್ಲಿ ನೀವು ಉಪವಾಸ ಮಾಡ
ಬೇಕು; ಯಾವ ಕೆಲಸವನ್ನೂ ಮಾಡಬಾರದು. 8 ನೀವು
ಇವುಗಳನ್ನು ಯೆಹೋವನಿಗೆ ಸುಗಂಧಕರವಾಗಿರುವ
ಸರ್ವಾಂಗಹೋಮವನ್ನಾಗಿ ಒಂದು ಹೋರಿಯನ್ನೂ
ಒಂದು ಟಗರನ್ನೂ ಒಂದು ವರ್ಷದ ಏಳು ಗಂಡುಕುರಿ
ಮರಿಗಳನ್ನೂ ಅರ್ಪಿಸಬೇಕು. ಇವು ಪೂರ್ಣಾಂಗವಾದವು
ಗಳಾಗಿರಬೇಕು. 9 ಇವುಗಳೊಡನೆ, ಧಾನ್ಯನೈವೇದ್ಯಕ್ಕಾಗಿ
ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು ಒಂದು ಹೋರಿಗೆ
ಒಂಭತ್ತು ಸೇರು, ಟಗರಿಗೆ ಆರು ಸೇರು 10 ಮತ್ತು ಒಂದು
ಕುರಿಮರಿಗೆ ಮೂರು ಸೇರು ಸಮರ್ಪಿಸಬೇಕು. 11 ಪಾಪ
ಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸ
ಬೇಕು. ದೋಷಪರಿಹಾರಕ ದಿನಕ್ಕೋಸ್ಕರ ಅರ್ಪಿಸುವ
ಪಾಪಪರಿಹಾರಕ ಯಜ್ಞ, ಕ್ರಮವಾಗಿ ಪ್ರತಿನಿತ್ಯ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರ ಧಾನ್ಯಾ
ರ್ಪಣೆ ಮತ್ತು ಇವುಗಳೊಡನೆ ಅರ್ಪಿಸುವ ದ್ರವ್ಯಾರ್ಪಣೆ
ಇವುಗಳಲ್ಲದೆ ಮೇಲೆ ಹೇಳಿದವುಗಳನ್ನು ಅರ್ಪಿಸಬೇಕು.
ಇವು ಯೆಹೋವನಿಗೆ ಸುಗಂಧಕರವಾಗಿವೆ.

### ಪರ್ಣಶಾಲೆಗಳ ಹಬ್ಬ

12 ''ಏಳನೆಯ ತಿಂಗಳಿನ ಹದಿನೈದನೆಯ ದಿನದಲ್ಲಿ
ವಿಶೇಷ ಸಭೆಕೂಡಬೇಕು. ಇದು ಪರ್ಣಶಾಲೆಗಳ ಹಬ್ಬ
ವಾಗಿದೆ. ಆ ದಿವಸ ನೀವು ಯಾವ ಪ್ರಯಾಸದ ಕೆಲಸವನ್ನೂ
ಮಾಡಬಾರದು. ಯೆಹೋವನಿಗೆ ಗೌರವಾರ್ಥವಾಗಿ
''ಪರ್ಣಶಾಲೆಗಳ ಹಬ್ಬ'' ವನ್ನು ನೀವು ಏಳು ದಿನಗಳವರೆಗೆ
ಆಚರಿಸಬೇಕು. 13 ನೀವು ಯೆಹೋವನಿಗೆ ಸರ್ವಾಂಗ
ಹೋಮಗಳನ್ನು ಅರ್ಪಿಸಬೇಕು. ಅದರ ಸುವಾಸನೆಯು
ಯೆಹೋವನಿಗೆ ಮೆಚ್ಚಿಗೆಕರವಾಗಿದೆ. ಸರ್ವಾಂಗ
ಹೋಮವಾಗಿ ಹದಿಮೂರು ಹೋರಿಗಳನ್ನು, ಎರಡು
ಟಗರುಗಳನ್ನು ಮತ್ತು ಒಂದು ವರುಷದ ಹದಿನಾಲ್ಕು
ಗಂಡುಕುರಿಮರಿಗಳನ್ನು ಅರ್ಪಿಸಬೇಕು. 14 ಧಾನ್ಯ
ನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು ಅರ್ಪಿಸ
ಬೇಕು. ಅಂದರೆ ಪ್ರತಿಯೊಂದು ಹೋರಿಗೆ ಒಂಭತ್ತು
ಸೇರು, ಟಗರಿಗೆ ಆರು ಸೇರು 15 ಮತ್ತು ಒಂದು ಕುರಿ
ಮರಿಗೆ ಮೂರು ಸೇರು ಸಮರ್ಪಿಸಬೇಕು. 16 ಕ್ರಮವಾಗಿ
ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದ
ರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನ
ದ್ರವ್ಯಾರ್ಪಣೆಗಳಲ್ಲದೆ ದೋಷಪರಿಹಾರಕ ಯಜ್ಞಕ್ಕಾಗಿ
ಒಂದು ಹೋತವನ್ನು ಸಮರ್ಪಿಸಬೇಕು.

17 ''ಆ ಉತ್ಸವದ ಎರಡನೆಯ ದಿನದಲ್ಲಿ ನೀವು
ಹನ್ನೆರಡು ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು
ಒಂದು ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು
ಅರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗವಾದವು
ಗಳಾಗಿರಬೇಕು. 18 ಅಲ್ಲದೆ ಈ ಪಶುಗಳಲ್ಲಿ ಪ್ರತಿ
ಯೊಂದಕ್ಕೂ ನೇಮಕಗೊಂಡ ಧಾನ್ಯಾರ್ಪಣೆಯನ್ನು
ಮತ್ತು ಪಾನದ್ರವ್ಯಾರ್ಪಣೆಯನ್ನು ಸರಿಯಾದ ಪ್ರಮಾಣ
ದಲ್ಲಿ ಅರ್ಪಿಸಬೇಕು. 19 ಪಾಪಪರಿಹಾರಕ ಯಜ್ಞಕ್ಕಾಗಿ
ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾಗಿ
ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದ
ರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನ
ದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸ
ಬೇಕು.

20 ''ಈ ಉತ್ಸವದ ಮೂರನೆಯ ದಿನದಲ್ಲಿ ನೀವು
ಹನ್ನೊಂದು ಹೋರಿಗಳನ್ನು, ಎರಡು ಟಗರುಗಳನ್ನು
ಮತ್ತು ಒಂದು ವರ್ಷದ ಹದಿನಾಲ್ಕು ಗಂಡು ಕುರಿ
ಮರಿಗಳನ್ನು ಅರ್ಪಿಸಬೇಕು. ಇವುಗಳು ಪೂರ್ಣಾಂಗ
ವಾದವುಗಳಾಗಿರಬೇಕು. 21 ಈ ಪಶುಗಳಲ್ಲಿ ಪ್ರತಿ
ಯೊಂದಕ್ಕೂ ನೇಮಕವಾಗಿರುವ ಧಾನ್ಯಾರ್ಪಣೆಯನ್ನು
ಮತ್ತು ಪಾನದ್ರವ್ಯಾರ್ಪಣೆಯನ್ನು ಸರಿಯಾದ ಪ್ರಮಾಣ
ದಲ್ಲಿ ಅರ್ಪಿಸಬೇಕು. 22 ದೋಷಪರಿಹಾರಕ್ಕಾಗಿ ಒಂದು
ಹೋತವನ್ನು ಸಮರ್ಪಿಸಬೇಕು. ಕ್ರಮಾನುಸಾರವಾದ
ದೈನಂದಿನ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆ
ಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.

23 ''ಈ ಉತ್ಸವದ ನಾಲ್ಕನೆಯ ದಿನದಲ್ಲಿ ನೀವು ಹತ್ತು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡು ಕುರಿಮರಿಗಳನ್ನು ಅರ್ಪಿಸ
ಬೇಕು. ಇವು ಪೂರ್ಣಾಂಗವುಳ್ಳವುಗಳಾಗಿರಬೇಕು. 24 ಈ
ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರವೇ
ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾರ್ಪಣೆಯನ್ನು
ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು. 25 ಪಾಪಪರಿ
ಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸ
ಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗ
ಹೋಮ ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ
ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು
ಅರ್ಪಿಸಬೇಕು.

26 ''ಈ ಉತ್ಸವದ ಐದನೆಯ ದಿನದಲ್ಲಿ ನೀವು ಒಂಭತ್ತು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸ
ಬೇಕು. ಇವುಗಳೆಲ್ಲಾ ಪೂರ್ಣಾಂಗವಾದವುಗಳಾಗಿರ
ಬೇಕು. 27 ಈ ಪಶುಗಳಲ್ಲಿ ಪ್ರತಿಯೊಂದಕ್ಕೂ ನೇಮಕ

ಗೊಂಡ ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾರ್ಪಣೆಯನ್ನು ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು. 28ಪಾಪಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾದ ದೈನಂದಿನ ಸರ್ವಾಂಗ ಹೋಮ ಮತ್ತು ಅದರೊಡನೆ ಅರ್ಪಿಸಬೇಕಾದ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನೂ ಅರ್ಪಿಸಬೇಕು.

29‘‘ಈ ಉತ್ಸವದ ಆರನೆಯ ದಿನದಲ್ಲಿ ನೀವು ಎಂಟು ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗವುಳ್ಳವುಗಳಾಗಿರಬೇಕು. 30ಈ ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರವೇ ಧಾನ್ಯಾರ್ಪಣೆಯನ್ನೂ ಪಾನದ್ರವ್ಯಾರ್ಪಣೆಯನ್ನೂ ಸರಿಯಾದ ಪ್ರಮಾಣದಲ್ಲಿ ಮಾಡಬೇಕು. 31ದೋಷಪರಿಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.

32‘‘ಈ ಉತ್ಸವದ ಏಳನೆಯ ದಿನದಲ್ಲಿ ನೀವು ಏಳು ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸಬೇಕು. ಅವುಗಳೆಲ್ಲ ಪೂರ್ಣಾಂಗವಾದವುಗಳಾಗಿರಬೇಕು. 33ಈ ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರವೇ ಧಾನ್ಯಾರ್ಪಣೆಗಳನ್ನು ಮತ್ತು ಪಾನದ್ರವ್ಯಾರ್ಪಣೆಗಳನ್ನು ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು. 34ದೋಷಪರಿಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನೂ ಅರ್ಪಿಸಬೇಕು.

35‘‘ಎಂಟನೆಯ ದಿನದಲ್ಲಿ ಮುಕ್ತಾಯ ಸಭಾಕೂಟವಿರುವುದು. ಆ ದಿನದಲ್ಲಿ ಯಾವ ಪ್ರಯಾಸದ ಕೆಲಸವನ್ನೂ ಮಾಡಬಾರದು. 36ನೀವು ಈ ಕೆಳಕಂಡವುಗಳನ್ನು ಯೆಹೋವನಿಗೆ ಸುಗಂಧಕರವಾದ ತ್ಯಾಗಮಯವಾದ ಸರ್ವಾಂಗಹೋಮವನ್ನಾಗಿ ಒಂದು ಹೋರಿಯನ್ನೂ ಒಂದು ಟಗರನ್ನೂ ಒಂದು ವರ್ಷದ ಏಳು ಗಂಡುಕುರಿಮರಿಗಳನ್ನೂ ಅರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗವಾದವುಗಳಾಗಿರಬೇಕು. 37ಈ ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರವೇ ಧಾನ್ಯಾರ್ಪಣೆಗಳನ್ನು ಮತ್ತು ಪಾನದ್ರವ್ಯಾರ್ಪಣೆಗಳನ್ನು ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು. 38ಪಾಪಪರಿಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಅದರ ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.

39‘‘ಮೇಲೆ ತಿಳಿಸಿರುವ ಸಾರ್ವಜನಿಕ ಯಜ್ಞಗಳನ್ನು ಇಡೀ ಸಮುದಾಯಕ್ಕೋಸ್ಕರ ಹಬ್ಬದ ದಿನಗಳಲ್ಲಿ ನಿಮ್ಮ ಸರ್ವಾಂಗಹೋಮಗಳನ್ನಾಗಿಯೂ ಧಾನ್ಯಾರ್ಪಣೆಗಳನ್ನಾಗಿಯೂ ಪಾನದ್ರವ್ಯಾರ್ಪಣೆಗಳನ್ನಾಗಿಯೂ ಮತ್ತು ಸಮಾಧಾನ ಯಜ್ಞಗಳನ್ನಾಗಿಯೂ ಅರ್ಪಿಸಬೇಕು. ನಿಮ್ಮ ವೈಯಕ್ತಿಕ ಹರಕೆಯ ಅರ್ಪಣೆ ಮತ್ತು ಸ್ವಯಿಚ್ಛಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.’’

40‘‘ಯೆಹೋವನು ಆಜ್ಞಾಪಿಸಿದ್ದನ್ನೆಲ್ಲಾ ಮೋಶೆಯು ಇಸ್ರೇಲರಿಗೆ ತಿಳಿಸಿದನು.

### ವಿಶೇಷ ಹರಕೆಗಳು

30 ಮೋಶೆಯು ಇಸ್ರೇಲರ ಕುಲಪ್ರಧಾನರಿಗೆ ಹೇಳಿದ್ದೇನೆಂದರೆ, ‘‘ಯೆಹೋವನು ಹೀಗೆ ಆಜ್ಞಾಪಿಸಿದ್ದಾನೆ: 2‘‘ಯಾವನಾದರೂ ಯೆಹೋವನಿಗೆ ಇಂಥದ್ದನ್ನು ಕೊಡುತ್ತೇನೆಂದು ಹರಕೆ ಮಾಡಿದರೆ ಅಥವಾ ತಾನು ಇಂಥದ್ದನ್ನು ಮಾಡುವುದಿಲ್ಲ ಎಂದು ಆಣೆಯಿಟ್ಟುಕೊಂಡರೆ, ಅವನು ತನ್ನ ಮಾತನ್ನು ಮೀರದೆ ತಾನು ಹೇಳಿದಂತೆಯೇ ನೆರವೇರಿಸಬೇಕು.

3‘‘ಇನ್ನೂ ತನ್ನ ತಂದೆಯ ಮನೆಯಲ್ಲಿರುವ ಯುವತಿಯು ಯೆಹೋವನಿಗೆ ಇಂಥದ್ದನ್ನು ಕೊಡುತ್ತೇನೆಂದು ಹರಕೆ ಮಾಡಿಕೊಂಡರೆ ಅಥವಾ ಇಂಥದ್ದನ್ನು ಮಾಡುವುದಿಲ್ಲ ಎಂದು ಆಣೆಯಿಟ್ಟುಕೊಂಡರೆ, 4ಆದರೆ ಅವಳ ತಂದೆಯು ಅವಳ ಹರಕೆಯನ್ನಾಗಲೀ ಆಣೆಯನ್ನಾಗಲೀ ಕೇಳಿಯೂ ಅದರ ಬಗ್ಗೆ ಅವಳಿಗೆ ಏನೂ ಹೇಳದಿದ್ದರೆ, ಆಕೆಯು ಅಂಥಾ ಹರಕೆಯನ್ನೂ ಆಣೆಯನ್ನೂ ನೆರವೇರಿಸಲೇಬೇಕು. 5ಆದರೆ ತಂದೆಯು ಆ ಸಂಗತಿಯನ್ನು ತಿಳಿದ ದಿನವೇ ಅದನ್ನು ಆಕ್ಷೇಪಿಸಿದರೆ, ಆಕೆಯು ಮಾಡಿದ ಹರಕೆಯನ್ನಾಗಲೀ ಇಟ್ಟುಕೊಂಡ ಆಣೆಯನ್ನಾಗಲೀ ನೆರವೇರಿಸಬೇಕಿಲ್ಲ. ತಂದೆಯು ಆಕ್ಷೇಪಿಸಿದ್ದರಿಂದ ಯೆಹೋವನು ಅವಳನ್ನು ಕ್ಷಮಿಸುವನು.

6‘‘ಆದರೆ ಅವಳು ತನ್ನ ಹರಕೆಯನ್ನಾಗಲೀ ಆಣೆಯನ್ನಾಗಲೀ ನೆರವೇರಿಸಿಲ್ಲದಿರುವಾಗಲೇ ಮದುವೆಯಾದರೆ, 7ಗಂಡನು ಅದರ ಬಗ್ಗೆ ತಿಳಿದ ದಿನದಂದು ಆಕೆಗೆ ಅದರ ಬಗ್ಗೆ ಏನೂ ಹೇಳದಿದ್ದರೆ, ಆಕೆ ತಾನು ಮಾಡಿದ ಹರಕೆಯನ್ನಾಗಲೀ ಆಣೆಯನ್ನಾಗಲೀ ನೆರವೇರಿಸಬೇಕು. 8ಆದರೆ ಗಂಡನು ಅದನ್ನು ಕೇಳಿದ ದಿನವೇ ಆಕ್ಷೇಪಿಸಿದರೆ, ಅವನು ಆಕೆಯ ಹರಕೆಯನ್ನಾಗಲೀ ಅಥವಾ

ಆಣೆಯನ್ನಾಗಲೀ ರದ್ದುಪಡಿಸುವನು. ಯೆಹೋವನು
ಅವಳನ್ನು ಕ್ಷಮಿಸುವನು.
[9]“ವಿಧವೆಯಾಗಲೀ ವಿವಾಹವಿಚ್ಛೇಧನ ಹೊಂದಿದ
ಸ್ತ್ರೀಯಾಗಲೀ ತಾನು ಮಾಡಿದ ಪ್ರತಿಯೊಂದು ಹರಕೆ
ಯನ್ನೂ ಆಣೆಯನ್ನೂ ನೆರವೇರಿಸಲೇಬೇಕು.
[10]ವಿವಾಹಿತ ಸ್ತ್ರೀಯು ಅಂಥಾ ಹರಕೆಯನ್ನಾಗಲೀ
ಪ್ರಮಾಣವನ್ನಾಗಲೀ ಮಾಡಿದಾಗ, [11]ಅವಳ ಗಂಡನು
ತಿಳಿದು ಅಡ್ಡಿಮಾಡದೆ ಏನೂ ಹೇಳದಿದ್ದರೆ ಆಕೆಯು ಆ
ಹರಕೆಗಳನ್ನೂ ಆಣೆಗಳನ್ನೂ ನೆರವೇರಿಸಬೇಕು. [12]ಆದರೆ
ಗಂಡನು ಅವುಗಳನ್ನು ತಿಳಿದಾಗಲೇ ರದ್ದುಗೊಳಿಸಿದರೆ,
ಅವಳ ಎಲ್ಲ ಹರಕೆಗಳಿಗೆ ಮತ್ತು ಆಣೆಗಳಿಗೆ ಬೆಲೆ
ಯಿರುವುದಿಲ್ಲ. ಯಾಕಂದರೆ ಗಂಡನು ಅವುಗಳನ್ನು ರದ್ದು
ಪಡಿಸಿದನು ಮತ್ತು ಯೆಹೋವನು ಆಕೆಯನ್ನು ಕ್ಷಮಿಸು
ತ್ತಾನೆ. [13]ಹೆಂಡತಿ ಮಾಡಿದ ಹರಕೆಯನ್ನೂ ಆಣೆಯನ್ನೂ
ಸ್ಥಾಪಿಸುವುದಕ್ಕಾಗಲೀ ರದ್ದುಮಾಡುವುದಕ್ಕಾಗಲೀ
ಗಂಡನಿಗೆ ಅಧಿಕಾರವಿರುವುದು. [14]ಆದರೆ ಅವಳ ಗಂಡನು
ಅದನ್ನು ಕೇಳಿದ ದಿನದಿಂದ ಅದರ ಬಗ್ಗೆ ಆಕ್ಷೇಪಿಸದಿದ್ದರೆ,
ಅವನು ಅವಳ ಎಲ್ಲಾ ಹರಕೆಗಳನ್ನು ಮತ್ತು ಆಣೆಗಳನ್ನು
ಸ್ಥಾಪಿಸಿದ್ದಾನೆ. ಯಾಕಂದರೆ ಅವನು ಅದರ ಬಗ್ಗೆ ಕೇಳಿದ
ದಿನದಂದು ಅವಳಿಗೆ ಏನೂ ಹೇಳಲಿಲ್ಲ. [15]ಆದರೆ ಅವನು
ಅವುಗಳ ಬಗ್ಗೆ ಕೇಳಿ ಸ್ವಲ್ಪ ದಿನಗಳಾದ ಮೇಲೆ ಆಕೆಯ
ಹರಕೆಗಳನ್ನಾಗಲೀ ವಾಗ್ದಾನಗಳನ್ನಾಗಲೀ ರದ್ದು ಪಡಿಸಿ
ದರೆ, ಆಕೆಯ ಹರಕೆಯನ್ನು ಮುರಿದದ್ದಕ್ಕಾಗಿ ಅವನು
ಶಿಕ್ಷೆಯನ್ನು ಅನುಭವಿಸುವನು.”
[16]ಗಂಡಹೆಂಡತಿಯರ ಬಗ್ಗೆ, ತಂದೆಯೊಡನೆ ಇನ್ನೂ
ಮನೆಯಲ್ಲಿರುವ ಮಗಳ ವಿಷಯದಲ್ಲಿ ಯೆಹೋವನು
ಮೋಶೆಗೆ ಈ ಆಜ್ಞೆಗಳನ್ನು ಕೊಟ್ಟನು.

## ಇಸ್ರೇಲರು ಮಿದ್ಯಾನ್ಯರನ್ನು ಸಂಹರಿಸಿದ್ದು

31 ಯೆಹೋವನು ಮೋಶೆಯೊಡನೆ ಮಾತಾಡಿ
ಹೀಗಂದನು, [2]“ಮಿದ್ಯಾನ್ಯರನ್ನು ಸೋಲಿಸು
ವುದರಿಂದ ನಾನು ಇಸ್ರೇಲರ ಗೌರವವನ್ನು ಸ್ಥಾಪಿಸು
ವೆನು. ಇದಾದನಂತರ ನೀನು ಸಾಯುವಿ.”
[3]ಆಗ ಮೋಶೆ ಇಸ್ರೇಲರಿಗೆ, “ಮಿದ್ಯಾನ್ಯರು
ಯೆಹೋವನಿಗೆ ವಿರೋಧವಾಗಿ ಮಾಡಿದ ಕೃತ್ಯಗಳಿಗಾಗಿ
ಅವರ ಮೇಲೆ ಆಕ್ರಮಣಮಾಡಿ ದಂಡಿಸಲು ನಿಮ್ಮಲ್ಲಿರುವ
ಗಂಡಸರಲ್ಲಿ ಕೆಲವರನ್ನು ದಂಡಯಾತ್ರೆಗೆ ಆರಿಸಿಕೊಳ್ಳ
ಬೇಕು. [4]ಇಸ್ರೇಲಿನ ಕುಲಗಳವರಲ್ಲಿ ಪ್ರತಿಯೊಂದು
ಕುಲದಿಂದ ಒಂದು ಸಾವಿರ ಗಂಡಸರನ್ನು ದಂಡಯಾತ್ರೆಗೆ
ಕಳುಹಿಸಬೇಕು. [5]ಆದುದರಿಂದ ಇಸ್ರೇಲರ ಕುಲಗಳಿಂದ
ಪ್ರತಿಯೊಂದು ಕುಲಕ್ಕೆ ಒಂದು ಸಾವಿರ ಗಂಡಸರ ಪ್ರಕಾರ
ಹನ್ನೆರಡು ಸಾವಿರ ಗಂಡಸರನ್ನು ಯುದ್ಧಕ್ಕೆ ಆರಿಸಿ
ಕೊಳ್ಳಲಾಯಿತು” ಅಂದನು.
[6]ಮೋಶೆಯು ಅವರನ್ನು ಯುದ್ಧಕ್ಕೆ ಕಳುಹಿಸಿದನು.
ಅವರ ಸಂಗಡ ಎಲ್ಲಾಜಾರನ ಮಗನಾದ ಫೀನೆಹಾಸ
ನನ್ನೂ ಕಳುಹಿಸಿದನು. ಫೀನೆಹಾಸನು ಪವಿತ್ರವಸ್ತುಗಳನ್ನು
ತೆಗೆದುಕೊಂಡನು ಮತ್ತು ಸೂಚನೆ ಕೊಡುವುದಕ್ಕಾಗಿ
ತುತ್ತೂರಿಗಳನ್ನು ತೆಗೆದುಕೊಂಡನು. [7]ಯೆಹೋವನು
ಆಜ್ಞಾಪಿಸಿದಂತೆಯೇ ಇಸ್ರೇಲರು ಮಿದ್ಯಾನ್ಯರೊಡನೆ
ಯುದ್ಧಮಾಡಿದರು. ಅವರು ಮಿದ್ಯಾನ್ಯರ ಗಂಡಸ
ರೆಲ್ಲರನ್ನು ಕೊಂದರು. [8]ಅವರು ಕೊಂದವರಲ್ಲಿ ಎವೀ,
ರೆಕೆಮ್, ಚೂರ್, ಹೂರ್ ಮತ್ತು ರೆಬಾ ಎಂಬ
ಮಿದ್ಯಾನ್ಯರ ಐದು ಮಂದಿ ರಾಜರು ಸೇರಿದ್ದರು. ಅವರು
ಕತ್ತಿಯಿಂದ ಬೆಯೋರನ ಮಗನಾದ ಬಿಳಾಮನನ್ನೂ
ಕೊಂದರು. [9]ಇಸ್ರೇಲರು ಮಿದ್ಯಾನ್ಯರ ಹೆಂಗಸರನ್ನು
ಮತ್ತು ಮಕ್ಕಳನ್ನು ಸೆರೆಹಿಡಿದರು. ಅವರು ಮಿದ್ಯಾನ್ಯರ
ಎಲ್ಲಾ ಪಶುಗಳನ್ನು, ಮತ್ತು ಇತರ ಅಮೂಲ್ಯವಾದ
ವಸ್ತುಗಳನ್ನು ತೆಗೆದುಕೊಂಡರು. [10]ಅವರು ನೆಲೆಸಿದ್ದ
ಊರುಗಳನ್ನೂ ಪಾಳೆಯಗಳನ್ನೂ ಸುಟ್ಟುಹಾಕಿದರು.
[11]ಎಲ್ಲಾ ಜನರನ್ನೂ ಪಶುಗಳನ್ನೂ ಹಿಡಿದು, [12]ತಾವು
ಸೆರೆಹಿಡಿದವರನ್ನೂ ಪಶುಗಳನ್ನೂ ಆಸ್ತಿಯನ್ನೂ ತೆಗೆದು
ಕೊಂಡು ಜೆರಿಕೋ ಪಟ್ಟಣದ ಆಚೆ ಜೋರ್ಡನ್
ಹೊಳೆಯ ತೀರದಲ್ಲಿ ಮೋವಾಬ್ಯರ ಬಯಲಿನಲ್ಲಿದ್ದ
ಪಾಳೆಯಕ್ಕೆ ಅಂದರೆ ಮೋಶೆ, ಯಾಜಕನಾದ
ಎಲ್ಲಾಜಾರ್ ಮತ್ತು ಇಸ್ರೇಲರ ಸರ್ವಸಮೂಹದವರು
ಇದ್ದಲ್ಲಿಗೆ ಬಂದರು. [13]ಮೋಶೆಯೂ ಯಾಜಕನಾದ
ಎಲ್ಲಾಜಾರನೂ ಸಮೂಹದ ಪ್ರಧಾನರೂ ಪಾಳೆಯದ
ಹೊರಗೆ ಬಂದು ಸೈನಿಕರನ್ನು ಎದುರುಗೊಂಡರು.
[14]ಮೋಶೆಯು ಯುದ್ಧದಿಂದ ಹಿಂತಿರುಗಿ ಬರುತ್ತಿದ್ದ
ಸೈನ್ಯಾಧಿಕಾರಿಗಳ ಮೇಲೆ ಅಂದರೆ ಸಹಸ್ರಾಧಿಪತಿಗಳ
ಮತ್ತು ಶತಾಧಿಪತಿಗಳ ಮೇಲೆ ಕೋಪಗೊಂಡನು.
[15]ಅವನು ಅವರಿಗೆ, “ನೀವು ಎಲ್ಲಾ ಹೆಂಗಸರನ್ನು
ಉಳಿಸಿದ್ದೇಕೆ? [16]ಬಿಳಾಮನ ಸಲಹೆಯನ್ನು ಅನುಸರಿಸಿ,
ಯೆಹೋವನಿಗೆ ವಿರೋಧವಾಗಿ ಇಸ್ರೇಲರು ಪಾಪ
ಮಾಡುವಂತೆ ಮಾಡಿ ಪೆಗೋರದ ಬಾಳನ ಸಂಗತಿಗೆ
ಕಾರಣರಾದವರು ಇವರೇ ಅಲ್ಲವೇ? ಅದರ ಫಲವಾಗಿ
ಭಯಂಕರವಾದ ಕಾಯಿಲೆಯು ಜನರಿಗೆ ಬಂದಿತು.
[17]ಆದುದರಿಂದ ಈ ಗುಂಪಿನಲ್ಲಿರುವ ಎಲ್ಲಾ ಹುಡುಗ
ರನ್ನೂ ಪುರುಷಸಂಗಮ ಮಾಡಿದ ಎಲ್ಲಾ ಮಿದ್ಯಾನ್
ಹೆಂಗಸರನ್ನೂ ಕೊಲ್ಲಬೇಕು. [18]ಪುರುಷ ಸಂಗಮ
ಮಾಡದಿರುವ ಕನ್ಯೆಯರನ್ನು ನಿಮಗಾಗಿ ಉಳಿಸಿರಿ.
[19]ನೀವಾದರೊ ಏಳು ದಿನಗಳವರೆಗೂ ಪಾಳೆಯದ
ಹೊರಗೆ ಇರಬೇಕು. ಮನುಷ್ಯರನ್ನು ಕೊಂದವರೂ

ಶವಸೋಂಕಿದವರೂ ನಿಮ್ಮವರಾಗಿರಲೀ ಸೆರೆಯವ
ರಾಗಿರಲೀ ಮೂರನೆಯ ಮತ್ತು ಏಳನೆಯ ದಿನದಲ್ಲಿ
ನಿಮ್ಮನ್ನು ಶುದ್ಧೀಕರಿಸಿಕೊಳ್ಳಬೇಕು. [20]ಅದಲ್ಲದೆ ಎಲ್ಲಾ
ಬಟ್ಟೆಗಳನ್ನೂ ತೊಗಲಿನ ಸಾಮಾನುಗಳನ್ನೂ ಮೇಕೆ
ಕೂದಲಿನ ವಸ್ತುಗಳನ್ನೂ ಮರದ ಸಾಮಾನನ್ನೂ
ಶುದ್ಧಮಾಡಬೇಕು.''

[21]ಆಗ ಯಾಜಕನಾದ ಎಲ್ಲಾಜಾರನು ಸೈನಿಕರೊಡನೆ
ಮಾತಾಡಿ ಇಂತೆಂದೆನು: ''ಯೆಹೋವನು ಮೋಶೆಗೆ
ಯುದ್ಧದಿಂದ ಮರಳಿಬರುವ ಸೈನಿಕರ ಬಗ್ಗೆ ಆ ನಿಯಮ
ಗಳನ್ನು ಕೊಟ್ಟನು: [22-23]ಬೆಂಕಿಯನ್ನು ಸಹಿಸ ಬಲ್ಲ ಚಿನ್ನ,
ಬೆಳ್ಳಿ, ತಾಮ್ರ, ಕಬ್ಬಿಣ, ತವರ, ಸೀಸ ಮೊದಲಾದ
ವುಗಳನ್ನು ಬೆಂಕಿಯಲ್ಲಿ ಹಾಯಿಸಿ ಶುದ್ಧ ಮಾಡಬೇಕು.
ಬಳಿಕ ಶುದ್ಧೀಕರಣದ ನೀರಿನಿಂದ ಅವುಗಳನ್ನು ಶುದ್ಧೀಕ
ರಿಸಬೇಕು. ಬೆಂಕಿಯನ್ನು ಸಹಿಸಲಾರದ ವಸ್ತುಗಳನ್ನು
ನೀರಿನಿಂದ ಮಾತ್ರ ತೊಳೆಯಬೇಕು. [24]ಏಳನೆಯ ದಿನ
ದಲ್ಲಿ ನಿಮ್ಮ ಬಟ್ಟೆಗಳನ್ನು ಒಗೆದುಕೊಂಡ ನಂತರ ನೀವು
ಶುದ್ಧರಾಗುವಿರಿ. ಆಮೇಲೆ ನೀವು ಪಾಳೆಯದೊಳಗೆ
ಬರಬಹುದು.''

[25]ತರುವಾಯ ಯೆಹೋವನು ಮೋಶೆಗೆ, [26]''ನೀನೂ
ಯಾಜಕನಾದ ಎಲ್ಲಾಜಾರನೂ ಸಮುದಾಯದ ಎಲ್ಲಾ
ಕುಲಪ್ರಧಾನರೂ ಸೆರೆಸಿಕ್ಕಿದ ಮನುಷ್ಯರನ್ನು ಮತ್ತು
ಪಶುಗಳನ್ನು ಲೆಕ್ಕಿಸಿ ಪಟ್ಟಿಮಾಡಬೇಕು. [27]ಅವುಗಳನ್ನು
ಎರಡು ಭಾಗಮಾಡಿ ಯುದ್ಧಕ್ಕೆ ಹೋದ ಸೈನಿಕರಿಗೆ ಅರ್ಧ
ವನ್ನು ಮಿಕ್ಕಸಮೂಹದವರಿಗೆ ಅರ್ಧವನ್ನು ಹಂಚಿ ಕೊಡ
ಬೇಕು. [28]ಯುದ್ಧಕ್ಕೆ ಹೋದ ಸೈನಿಕರಿಗೆ ಬರುವ ಭಾಗ
ದಿಂದ ಮನುಷ್ಯರನ್ನು, ದನಕರುಗಳನ್ನು, ಕತ್ತೆಗಳನ್ನು
ಮತ್ತು ಕುರಿಗಳನ್ನು [29]ನೀನು ಐನೂರರಲ್ಲಿ ಒಂದರ
ಮೇರೆಗೆ ಯೆಹೋವನಿಗೋಸ್ಕರ ಕಪ್ಪವನ್ನು ತೆಗೆದು
ಕೊಂಡು, ಅದನ್ನು ಪ್ರತ್ಯೇಕಿಸಿ ಯಾಜಕನಾದ ಎಲ್ಲಾಜಾರ
ನಿಗೆ ಒಪ್ಪಿಸಬೇಕು. [30]ಮಿಕ್ಕ ಇಸ್ರೇಲರಿಗೆ ಬರುವ ಭಾಗ
ದಿಂದ ಮನುಷ್ಯರನ್ನು, ದನಕರುಗಳನ್ನು, ಕತ್ತೆಗಳನ್ನು,
ಕುರಿಗಳನ್ನು ಐವತ್ತರಲ್ಲಿ ಒಂದರ ಮೇರೆಗೆ ತೆಗೆದುಕೊಳ್ಳ
ಬೇಕು. ಅದನ್ನು ಯೆಹೋವನ ಪವಿತ್ರಗುಡಾರವನ್ನು
ನೋಡಿಕೊಳ್ಳುವ ಲೇವಿಯರಿಗೆ ಕೊಡಬೇಕು'' ಎಂದು
ಆಜ್ಞಾಪಿಸಿದನು.

[31]ಯೆಹೋವನು ಮೋಶೆಗೆ ಆಜ್ಞಾಪಿಸಿದ್ದಂತೆಯೇ
ಮೋಶೆ ಮತ್ತು ಎಲ್ಲಾಜಾರರು ಮಾಡಿದರು. [32]ಸೈನಿಕರು
ಆರು ಲಕ್ಷದ ಎಪ್ಪತ್ತೈದು ಸಾವಿರ ಕುರಿಗಳನ್ನು, [33]ಎಪ್ಪ
ತ್ತೆರಡು ಸಾವಿರ ದನಕರುಗಳನ್ನು, [34]ಅರವತ್ತೊಂದು
ಸಾವಿರ ಕತ್ತೆಗಳನ್ನು, [35]ಮೂವತ್ತೆರಡು ಸಾವಿರ ಕನ್ನಿಕೆ
ಯರನ್ನು ಪಡೆದುಕೊಂಡರು. [36]ಯುದ್ಧಕ್ಕೆ ಹೋದ
ಸೈನಿಕರು ಅರ್ಧಭಾಗವನ್ನು ಅಂದರೆ ಮೂರು ಲಕ್ಷದ
ಮೂವತ್ತೇಳು ಸಾವಿರದ ಐನೂರು ಕುರಿಗಳನ್ನು ಪಡೆದು
ಕೊಂಡರು. [37]ಅವರು ಆರುನೂರ ಐವತ್ತೇಳು ಕುರಿ
ಗಳನ್ನು ಯೆಹೋವನಿಗೆ ಕೊಟ್ಟರು. [38]ಸೈನಿಕರು ಮೂವ
ತ್ತಾರು ಸಾವಿರ ದನಕರುಗಳನ್ನು ಪಡೆದುಕೊಂಡರು.
ಅವುಗಳಲ್ಲಿ ಎಪ್ಪತ್ತೆರಡು ದನಕರುಗಳನ್ನು ಯೆಹೋವನಿಗೆ
ಕೊಟ್ಟರು. [39]ಸೈನಿಕರು ಮೂವತ್ತು ಸಾವಿರದ ಐನೂರು
ಕತ್ತೆಗಳನ್ನು ಪಡೆದುಕೊಂಡರು. ಅವರು ಅರವತ್ತೊಂದು
ಕತ್ತೆಗಳನ್ನು ಯೆಹೋವನಿಗೆ ಕೊಟ್ಟರು. [40]ಸೈನಿಕರು
ಹದಿನಾರು ಸಾವಿರ ಮಂದಿ ಕನ್ನಿಕೆಯರನ್ನು ಪಡೆದು
ಕೊಂಡರು. ಅವರು ಮೂವತ್ತೆರಡು ಮಂದಿ ಕನ್ನಿಕೆ
ಯರನ್ನು ಯೆಹೋವನಿಗೆ ಕೊಟ್ಟರು. [41]ಮೋಶೆಯು
ಯೆಹೋವನ ಅಪ್ಪಣೆಯ ಮೇರೆಗೆ ಆ ಕಪ್ಪವನ್ನೆಲ್ಲ
ಯೆಹೋವನಿಗೆ ಕೊಡುಗೆಯಾಗಿ ಯಾಜಕನಾದ
ಎಲ್ಲಾಜಾರನಿಗೆ ಕೊಟ್ಟನು.

[42-43]ಮೋಶೆಯು ಜನರ ಅರ್ಧಭಾಗವನ್ನು ಎಣಿಸಿ
ದನು. ಯುದ್ಧಕ್ಕೆ ಹೋಗಿದ್ದ ಸೈನಿಕರಿಂದ ಮೋಶೆಯು
ತೆಗೆದುಕೊಂಡ ಜನರ ಅರ್ಧಭಾಗ: ಮೂರು ಲಕ್ಷದ
ಮೂವತ್ತೇಳು ಸಾವಿರದ ಐನೂರು ಕುರಿಗಳು, [44]ಮೂವ
ತ್ತಾರು ಸಾವಿರ ದನಕರುಗಳು, [45]ಮೂವತ್ತು ಸಾವಿರದ
ಐನೂರು ಕತ್ತೆಗಳು [46]ಮತ್ತು ಹದಿನಾರು ಸಾವಿರ ಸ್ತ್ರೀ
ಯರು. [47]ಇಸ್ರೇಲ್ ಜನರಿಗೆ ದೊರಕಿದ ಅರ್ಧಭಾಗ
ದಿಂದ ಮನುಷ್ಯರಲ್ಲಿಯೂ ಪಶುಗಳಲ್ಲಿಯೂ ಮೋಶೆ
ಐವತ್ತನೆ ಒಂದು ಭಾಗವನ್ನು ತೆಗೆದುಕೊಂಡು
ಯೆಹೋವನ ಪವಿತ್ರಗುಡಾರವನ್ನು ನೋಡಿಕೊಳ್ಳುತ್ತಿದ್ದ
ಲೇವಿಯರಿಗೆ ಕೊಟ್ಟನು.

[48]ಆಗ ದಂಡಿನ ಸಹಸ್ರಾಧಿಪತಿಗಳೂ ಶತಾಧಿಪತಿಗಳೂ
ಮೋಶೆಯ ಬಳಿಗೆ ಬಂದು, [49]''ನಿನ್ನ ದಾಸರಾದ ನಾವು
ನಮ್ಮ ಅಧಿಕಾರದೊಳಗೆ ಇದ್ದ ಸೈನಿಕರನ್ನು ಲೆಕ್ಕಿಸಲಾಗಿ
ಒಬ್ಬನಾದರೂ ಕಡಿಮೆಯಾಗಿಲ್ಲವೆಂದು ತಿಳಿಯಿತು.
[50]ಆದಕಾರಣ ಯೆಹೋವನು ಕಾಪಾಡಿದ ನಮ್ಮ ಪ್ರಾಣ
ಗಳಿಗೆ ಈಡಾಗಿ ಆತನಿಗೋಸ್ಕರ ಕಾಣಿಕೆಯಾಗಿ ನಮ್ಮಲ್ಲಿ
ಒಬ್ಬೊಬ್ಬನು ತನಗೆ ಸಿಕ್ಕಿದ ಚಿನ್ನದ ಒಡವೆಗಳನ್ನು ಅಂದರೆ
ತೋಳ್ಬಳೆ, ಕಡಗ, ಮುದ್ರೆಯುಂಗುರ, ಮುರುವು, ಕಂಠ
ಮಾಲೆ ಮುಂತಾದವುಗಳನ್ನು ನಮ್ಮ ಶುದ್ಧೀಕರಣಕ್ಕಾಗಿ
ಯೆಹೋವನಿಗೆ ತಂದಿದ್ದೇವೆ'' ಅಂದರು.

[51]ಅವರು ಕೊಟ್ಟ ಎಲ್ಲಾ ಚಿನ್ನದ ವಸ್ತುಗಳನ್ನು
ಮೋಶೆಯು ತೆಗೆದುಕೊಂಡು ಅವುಗಳನ್ನು ಯಾಜಕನಾದ
ಎಲ್ಲಾಜಾರನಿಗೆ ಕೊಟ್ಟನು. ಅವುಗಳನ್ನು ವಿಚಿತ್ರವಾಗಿ
ಮಾಡಲಾಗಿತ್ತು. [52]ಸಹಸ್ರಾಧಿಪತಿಗಳು ಮತ್ತು ಶತಾಧಿ
ಪತಿಗಳು ಯೆಹೋವನಿಗೆ ಕೊಟ್ಟ ಚಿನ್ನವು ನಾನೂರಿಪ್ಪತ್ತು
ಪೌಂಡು ತೂಕವಿತ್ತು. [53]ಉಳಿದದ್ದನ್ನು ಸೈನಿಕರು ತಮ
ಗಾಗಿ ಇಟ್ಟುಕೊಂಡರು. [54]ಮೋಶೆಯೂ ಯಾಜಕನಾದ

ಎಲ್ಲಾಜಾರನೂ ಸಹಸ್ರಾಧಿಪತಿಗಳೂ ಶತಾಧಿಪತಿಗಳೂ
ಕೊಟ್ಟ ಚಿನ್ನವನ್ನು ತೆಗೆದುಕೊಂಡು ದೇವದರ್ಶನ
ಗುಡಾರದಲ್ಲಿ ಇಟ್ಟರು. ಇಸ್ರೇಲರ ವಿಷಯದಲ್ಲಿ
ಜ್ಞಾಪಕಾರ್ಥವಾಗಿ ಇದು ಯೆಹೋವನ ಸನ್ನಿಧಿಯಲ್ಲಿ
ಇಡಲ್ಪಟ್ಟಿತು.

## ಜೋರ್ಡನ್ ಹೊಳೆಯ ಪೂರ್ವದಲ್ಲಿ ಇಸ್ರೇಲರ ಕುಟುಂಬಗಳು

32 ರೂಬೇನ್ ಕುಲದವರಿಗೂ ಗಾದ್ ಕುಲದವ
ರಿಗೂ ಬಹಳ ದನಗಳಿದ್ದವು. ಅವರು ಯಗ್ಜೇರ್
ಮತ್ತು ಗಿಲ್ಯಾದ್ ಪ್ರದೇಶಗಳನ್ನು ನೋಡಿದಾಗ ಅವು
ಅವರ ಪಶುಗಳ ಮೇವಿಗೆ ಒಳ್ಳೆಯ ಸ್ಥಳವೆಂದು ತಿಳಿದು
ಕೊಂಡರು. [2]ಆದ್ದರಿಂದ ರೂಬೇನ್ ಮತ್ತು ಗಾದ್
ಕುಲದವರು ಮೋಶೆಯ ಬಳಿಗೆ ಬಂದರು. ಅವರು
ಮೋಶೆಯ ಸಂಗಡದಲ್ಲೂ ಯಾಜಕನಾದ ಎಲ್ಲಾಜಾರನ
ಸಂಗಡದಲ್ಲೂ ಜನರ ನಾಯಕರ ಸಂಗಡದಲ್ಲೂ
ಮಾತಾಡಿ ಹೀಗೆ ಹೇಳಿದರು: [3-4]‘‘ಯೆಹೋವನು
ಇಸ್ರೇಲರಿಗೆ ಅಧೀನಪಡಿಸಿದ ಈ ಪ್ರದೇಶವು ಅಂದರೆ,
ಅಟಾರೋತ್, ದೀಬೋನ್, ಯಗ್ಜೇರ್, ನಿಮ್ರಾ,
ಹೆಷ್ಬೋನ್, ಎಲೆಯಾಲೆ, ಸೆಬಾಮ್, ನೆಬೋ,
ಬೆಯೋನ್ ಎಂಬ ಪಟ್ಟಣಗಳ ಪ್ರದೇಶವು ಪಶುಗಳ
ಮೇವಿಗೆ ಒಳ್ಳೆಯ ಸ್ಥಳವಾಗಿದೆ. ನಿಮ್ಮ ದಾಸರಾದ ನಮಗೆ
ಬಹಳ ಪಶುಗಳು ಇವೆ. [5]ಆದ್ದರಿಂದ ಈ ಪ್ರದೇಶವನ್ನೇ
ನಮಗೆ ಸ್ವಾಸ್ತ್ಯವನ್ನಾಗಿ ಕೊಟ್ಟರೆ ನಮಗೆ ಉಪಕಾರ
ಮಾಡಿದಂತಾಗುವುದು. ನಾವು ಜೋರ್ಡನ್ ನದಿಯನ್ನು
ದಾಟಿಹೋಗುವಂತೆ ಮಾಡಬೇಡ.’’

[6]ಮೋಶೆಯು ರೂಬೇನ್ ಮತ್ತು ಗಾದ್ ಕುಲಗಳ
ವರಿಗೆ, ‘‘ನಿಮ್ಮ ಸಹೋದರರು ಯುದ್ಧಕ್ಕೆ ಹೋಗುವಾಗ
ನೀವು ಇಲ್ಲೇ ಕುಳಿತಿರಬೇಕೇ? [7]ಯೆಹೋವನು
ಇಸ್ರೇಲರಿಗೆ ಕೊಟ್ಟ ದೇಶಕ್ಕೆ ಅವರು ಹೋಗದಂತೆ ನೀವು
ಯಾಕೆ ಅವರಿಗೆ ಅಧೈರ್ಯವನ್ನು ಹುಟ್ಟಿಸುತ್ತೀರಿ? [8]ಆ
ದೇಶವನ್ನು ನೋಡಿಕೊಂಡು ಬರುವುದಕ್ಕೆ ನಾನು
ಕಾದೇಶ್‌ಬರ್ನೇಯದಿಂದ ನಿಮ್ಮ ಪೂರ್ವಿಕರನ್ನು
ಗೂಢಚಾರರನ್ನಾಗಿ ಕಳುಹಿಸಿದಾಗ ಅವರೂ ಹಾಗೆಯೇ
ಮಾಡಿದರಲ್ಲಾ. [9]ಅವರು ಎಷ್ಕೋಲ್ ತಗ್ಗಿಗೆ ಬಂದು ಆ
ದೇಶವನ್ನು ನೋಡಿ ಇಸ್ರೇಲರಿಗೆ ಅಧೈರ್ಯವನ್ನು
ಹುಟ್ಟಿಸಿದ್ದರಿಂದ ಇಸ್ರೇಲರು ತಮಗೆ ಯೆಹೋವನು
ವಾಗ್ದಾನ ಮಾಡಿದ್ದ ದೇಶಕ್ಕೆ ಹೋಗಲೇ ಇಲ್ಲ. [10]ಆಗ
ಯೆಹೋವನು ಕೋಪಗೊಂಡು, [11-12]ಈಜಿಪ್ಟಿನಿಂದ
ಬಂದ ಈ ಜನರಲ್ಲಿ ಮತ್ತು ಇಪ್ಪತ್ತು ವರ್ಷ ಮೊದಲು
ಗೊಂಡು ಅದಕ್ಕಿಂತ ಹೆಚ್ಚು ವಯಸ್ಸಾದ ನಿಮ್ಮವರೆಲ್ಲಾ
ಕೆನಿಜ್ಜೀಯನಾದ ಯೆಫುನ್ನೆಯ ಮಗ ಕಾಲೇಬನ ಮತ್ತು
ನೂನನ ಮಗನಾದ ಯೆಹೋಶುವನ ಹೊರತು ಯಾರೂ
ನನ್ನನ್ನು ನಿಜವಾಗಿಯೂ ಅನುಸರಿಸದೆ ಹೋದದ್ದರಿಂದ,
ನಾನು ಅಬ್ರಹಾಮ್, ಇಸಾಕ್, ಯಾಕೋಬರಿಗೆ
ಪ್ರಮಾಣಪೂರ್ವಕವಾಗಿ ಕೊಟ್ಟ ದೇಶವನ್ನು ಅವರಿಬ್ಬರೇ
ಹೊರತು ಬೇರೆ ಯಾರೂ ನೋಡುವುದೇ ಇಲ್ಲ’ ಎಂದು
ಖಂಡಿತವಾಗಿ ಹೇಳಿದನು.

[13]‘‘ಆದ್ದರಿಂದ ಯೆಹೋವನು ಇಸ್ರೇಲರ ಮೇಲೆ
ಕೋಪಗೊಂಡು, ತನ್ನನ್ನು ಬೇಸರಗೊಳಿಸಿದ್ದ ಇಡೀ ತಲೆ
ಮಾರು ಸಾಯುವತನಕ ಇಸ್ರೇಲರನ್ನು ಮರು
ಭೂಮಿಯಲ್ಲಿ ನಲವತ್ತು ವರ್ಷಗಳ ಕಾಲ ಅಲೆ
ದಾಡಿಸಿದನು. [14]ದುಷ್ಟ ಸಂತತಿಯವರೇ, ಈಗ ನೀವು
ಯೆಹೋವನ ಭಯಂಕರವಾದ ಕೋಪವನ್ನು ಇನ್ನೂ
ಹೆಚ್ಚಾಗಿ ಮಾಡಲು ನಿಮ್ಮ ಪೂರ್ವಿಕರ ಸ್ಥಾನವನ್ನು
ತೆಗೆದುಕೊಂಡಿದ್ದೀರಿ. [15]ನೀವು ಆತನನ್ನು ಹಿಂಬಾಲಿಸದೆ
ಹೋದರೆ, ಆತನು ಇಸ್ರೇಲರನ್ನು ಮರುಭೂಮಿಯಲ್ಲಿ
ಇನ್ನೂ ಹೆಚ್ಚು ಕಾಲ ಬಿಟ್ಟುಬಿಡುವನು. ಈ ಜನರೆಲ್ಲರ
ನಾಶನಕ್ಕೆ ನೀವೇ ಕಾರಣರಾಗುವಿರಿ’’ ಎಂದು ಹೇಳಿದನು.

[16]ಆಗ ಅವರು ಮೋಶೆಯ ಬಳಿಗೆ ಬಂದು, ‘‘ನಮ್ಮ
ಪಶುಗಳಿಗಾಗಿ ನಾವು ಬೇಲಿಯನ್ನು ಹಾಕೋಣ ಮತ್ತು
ಸ್ತ್ರೀಯರಿಗಾಗಿ ಮತ್ತು ಮಕ್ಕಳಿಗಾಗಿ ಊರುಗಳನ್ನು
ಕಟ್ಟುವೆವು. [17]ಬಳಿಕ ಇಸ್ರೇಲರನ್ನು ಅವರವರ ಸ್ಥಳಗಳಿಗೆ
ಸೇರಿಸುವವರೆಗೆ ನಾವು ಅವರ ಮುಂದೆ ಹೋಗುವ
ಸೈನಿಕರಾಗಿ ಹೊರಡುವೆವು ಅಲ್ಲದೆ ನಮ್ಮ ಸ್ತ್ರೀಯರು
ಮತ್ತು ಮಕ್ಕಳು ಈ ದೇಶದ ಇತರ ನಿವಾಸಿಗಳಿಂದ
ತೊಂದರೆಗೊಳಗಾಗದೆ ಕೋಟೆಗಳುಳ್ಳ ಊರುಗಳಲ್ಲಿ
ಸುರಕ್ಷಿತವಾಗಿರುವರು. [18]ಇಸ್ರೇಲರೆಲ್ಲರು ದೇಶದಲ್ಲಿ
ನಮಗೆ ಬರಬೇಕಾದ ಸ್ವಾಸ್ತ್ಯವನ್ನು ತೆಗೆದುಕೊಳ್ಳುವ ತನಕ
ನಾವು ನಮ್ಮ ಮನೆಗಳಿಗೆ ಹೋಗುವುದಿಲ್ಲ. [19]ನಮಗೆ
ಜೋರ್ಡನ್ ಹೊಳೆಯ ಈಚೆ ಪೂರ್ವದಿಕ್ಕಿನಲ್ಲಿ ಸ್ವಾಸ್ತ್ಯವು
ದೊರಕಿದ್ದರಿಂದ ನಾವು ಹೊಳೆಯ ಆಚೆ ಎಲ್ಲಿಯೂ ಅವ
ರೊಂದಿಗೆ ಸ್ವಾಸ್ತ್ಯವನ್ನು ಅಪೇಕ್ಷಿಸುವುದಿಲ್ಲ’’ ಅಂದರು.

[20-22]ಅದಕ್ಕೆ ಮೋಶೆ, ‘‘ನೀವು ನಿಮ್ಮ ಮಾತಿನಂತೆ
ಯೆಹೋವನ ಮುಂದೆ ಸನ್ನದ್ಧರಾದ ಸೈನಿಕರಾಗಿ ಯುದ್ಧಕ್ಕೆ
ಹೋಗುವುದಾದರೆ, ಯೆಹೋವನು ತನ್ನ ವೈರಿಗಳನ್ನು
ಓಡಿಸುವ ತನಕ ಮತ್ತು ಆ ದೇಶವನ್ನು ಗೆದ್ದುಕೊಳ್ಳು
ವತನಕ ಪ್ರತಿಯೊಬ್ಬ ಪ್ರವೀಣ ಸೈನಿಕನು ಯೆಹೋವನ
ಮುಂದೆ ಜೋರ್ಡನ್ ನದಿಯನ್ನು ದಾಟಿದರೆ, ಆ ಬಳಿಕ
ನೀವು ನಿಮ್ಮ ಮನೆಗಳಿಗೆ ಹಿಂತಿರುಗಬಹುದು ಮತ್ತು
ನೀವು ಯೆಹೋವನ ದೃಷ್ಟಿಯಲ್ಲಿಯೂ ಇಸ್ರೇಲರ
ದೃಷ್ಟಿಯಲ್ಲಿಯೂ ನಿಮ್ಮ ಕರ್ತವ್ಯವನ್ನು ಮಾಡಿದವ
ರಾಗಿರುವಿರಿ. [23]ಆದರೆ ನೀವು ಈ ಸಂಗತಿಗಳನ್ನು ಮಾಡ
ದಿದ್ದರೆ, ಯೆಹೋವನಿಗೆ ವಿರೋಧವಾಗಿ ಪಾಪ

ಮಾಡಿದವರಾಗಿರುವಿರಿ ಮತ್ತು ನಿಮ್ಮ ಪಾಪವು ನಿಮ್ಮನ್ನು
ಹಿಡಿಯುವ ತನಕ ಹುಡುಕಿಕೊಂಡೇ ಬರುವುದು ಎಂದು
ಖಚಿತವಾಗಿ ತಿಳಿದುಕೊಳ್ಳಿರಿ. 24ನಿಮ್ಮ ಸ್ತ್ರೀಯರಿ
ಗಾಗಿಯೂ ಮಕ್ಕಳಿಗಾಗಿಯೂ ಊರುಗಳನ್ನು ಕಟ್ಟಿರಿ
ಮತ್ತು ಪಶುಗಳಿಗಾಗಿ ದೊಡ್ಡಿಯನ್ನು ಕಟ್ಟಿರಿ. ಬಳಿಕ ನೀವು
ವಾಗ್ದಾನ ಮಾಡಿದಂತೆಯೇ ಮಾಡಿರಿ'' ಎಂದನು.

25ಆಗ ಗಾದ್ಯರು ಮತ್ತು ರೂಬೇನ್ಯರು ಮೋಶೆಗೆ,
''ಸ್ವಾಮೀ, ನಾವು ನಿನ್ನ ಸೇವಕರಾಗಿದ್ದೇವೆ. ಆದ್ದರಿಂದ
ನೀನು ಆಜ್ಞಾಪಿಸಿದಂತೆಯೇ ನಾವು ಮಾಡುತ್ತೇವೆ.
26ನಮ್ಮ ಹೆಂಡತಿಯರು, ಮಕ್ಕಳು, ಪಶುಗಳು ಮತ್ತು
ಇತರ ಪ್ರಾಣಿಗಳು ಗಿಲ್ಯಾದಿನ ಊರುಗಳಲ್ಲಿ ವಾಸಿಸು
ವರು. 27ಆದರೆ ನಿನ್ನ ಸೇವಕರಾದ ನಾವು ಮತ್ತು
ದಂಡೆಯಾತ್ರೆಗಾಗಿ ಆರಿಸಲ್ಪಟ್ಟವರು ನಿನ್ನ ಆಜ್ಞೆಯ
ಪ್ರಕಾರ ಜೋರ್ಡನ್ ನದಿಯನ್ನು ಯೆಹೋವನ ಮುಂದೆ
ದಾಟಿಹೋಗಿ ಹೋರಾಡುತ್ತೇವೆ'' ಎಂದರು.

28ಆದ್ದರಿಂದ ಮೋಶೆಯು, ಅವರ ಬಗ್ಗೆ ಯಾಜಕ
ಎಲ್ಲಾಜಾರನಿಗೂ ನೂನನ ಮಗನಾದ ಯೆಹೋಶು
ವನಿಗೂ ಇಸ್ರೇಲ್ ಕುಲಗಳ ಗೋತ್ರಪ್ರಧಾನರಿಗೂ
ಆದೇಶಗಳನ್ನು ಕೊಟ್ಟನು. 29ಮೋಶೆ ಅವರಿಗೆ, ''ಗಾದ್
ಮತ್ತು ರೂಬೇನ್ ಕುಲಗಳಿಂದ ಯುದ್ಧಕ್ಕಾಗಿ ಆರಿಸ
ಲ್ಪಟ್ಟವರು ಜೋರ್ಡನ್ ನದಿಯನ್ನು ಯೆಹೋವನ
ಮುಂದೆ ದಾಟಿ ಆ ದೇಶವನ್ನು ಗೆದ್ದುಕೊಂಡರೆ, ನೀವು
ಅವರಿಗೆ ಗಿಲ್ಯಾದ್ ಪ್ರಾಂತ್ಯವನ್ನು ಸ್ವಾಸ್ತ್ಯವಾಗಿ ಕೊಡ
ಬೇಕು. 30ಆದರೆ ಆರಿಸಲ್ಪಟ್ಟವರು ನಿಮ್ಮೊಂದಿಗೆ
ನದಿಯನ್ನು ದಾಟದಿದ್ದರೆ, ಅವರು ನಿಮ್ಮೊಂದಿಗೆ ಕಾನಾನ್
ದೇಶದಲ್ಲಿ ಭೂಮಿಯನ್ನು ಪಡೆದುಕೊಳ್ಳಬೇಕು'' ಎಂದು
ಹೇಳಿದನು.

31ಅದಕ್ಕೆ ಗಾದ್ ಮತ್ತು ರೂಬೇನ್ ಕುಲಗಳವರು
ಒಪ್ಪಿ, 'ನಿನ್ನ ಸೇವಕರಾದ ನಾವು ಯೆಹೋವನ ಆಜ್ಞೆ
ಯಂತೆಯೇ ಮಾಡುವೆವು. 32ನಾವೇ ಯುದ್ಧ ಮಾಡುವ
ಸೈನಿಕರಾಗಿ ನದಿಯನ್ನು ದಾಟಿ ಯೆಹೋವನ ಮುಂದೆ
ಕಾನಾನ್ ದೇಶದೊಳಗೆ ಹೋಗುವೆವು. ಆದರೆ ನಮ್ಮ
ಸ್ವಾಸ್ತ್ಯವಾದ ಭೂಮಿಯು ಜೋರ್ಡನ್ ನದಿಯ
ಈಚೆಕಡೆಯಲ್ಲಿರುವುದು'' ಎಂದರು.

33ಆಗ ಮೋಶೆಯು ಗಾದ್ ಮತ್ತು ರೂಬೇನ್
ಕುಲಗಳವರಿಗೆ ಮತ್ತು ಯೋಸೇಫನ ಮಗನಾದ
ಮನಸ್ಸೆಯ ಅರ್ಧಕುಲದವರಿಗೆ ಅಮೋರಿಯರ ರಾಜ
ನಾದ ಸೀಹೋನನ ರಾಜ್ಯವನ್ನೂ ಬಾಷಾನಿನ ರಾಜನಾದ
ಓಗನ ರಾಜ್ಯವನ್ನೂ ಅವುಗಳ ಎಲ್ಲಾ ಊರುಗಳನ್ನೂ ಆ
ಊರುಗಳಿಗೆ ಸೇರಿದ ಭೂಮಿಗಳನ್ನೂ ಕೊಟ್ಟನು.
34ಗಾದ್ ಕುಲದವರು ದೀಬೋನ್, ಅಟಾರೋತ್,
ಅರೋಯೇರ್, 35ಅಟ್ರೋತ್ಶೋಫಾನ್, ಯಗ್ಜೇರ್,
ಯೊಗ್ಬೆಹಾ, ಬೇತ್ನಿಮ್ರಾ, 36ಬೇತ್ಹಾರಾನ್ ಎಂಬ
ಕೋಟೆಗಳುಳ್ಳ ಊರುಗಳನ್ನು ಹೊಸದಾಗಿ ಕಟ್ಟಿ
ಕೊಂಡರು ಮತ್ತು ತಮ್ಮ ಪಶುಗಳಿಗಾಗಿ ದೊಡ್ಡಿಗಳನ್ನು
ಕಟ್ಟಿಕೊಂಡರು. 37-38ರೂಬೇನ್ ಕುಲದವರು
ಹೆಷ್ಬೋನ್, ಎಲೆಯಾಲೆ, ಕಿರ್ಯಾತಯಿಮ್, ನೆಬೋ,
ಬಾಳ್ಮೆಯೋನ್ ಮತ್ತು ಸಿಬ್ಮಾ ಎಂಬ ಊರುಗಳನ್ನು
ಕೋಟೆ ಸಮೇತವಾಗಿ ಕಟ್ಟಿದರು; ಅಲ್ಲದೆ ತಮ್ಮ
ಪಶುಗಳಿಗಾಗಿ ದೊಡ್ಡಿಯನ್ನು ಕಟ್ಟಿದರು. ಅವರು ತಾವು
ಮತ್ತೆ ಕಟ್ಟಿದ ಊರುಗಳಿಗೆ ಅವುಗಳ ಮೊದಲಿನ
ಹೆಸರುಗಳನ್ನು ಕೊಟ್ಟರು; ಆದರೆ ನೆಬೋ ಮತ್ತು
ಬಾಳ್ಮೆಯೋನ್‌ಗಳ ಹೆಸರುಗಳನ್ನು ಬದಲಾಯಿಸಿದರು.
39ಮಾಕೀರನ ಕುಲದವರು ಗಿಲ್ಯಾದಿಗೆ ಹೋದರು.
(ಮಾಕೀರನು ಮನಸ್ಸೆಯ ಮಗ.) ಅವರು ಆ ಪಟ್ಟಣದಲ್ಲಿ
ವಾಸಿಸುತ್ತಿದ್ದ ಅಮೋರಿಯರನ್ನು ಓಡಿಸಿ ಅದನ್ನು ವಶ
ಪಡಿಸಿಕೊಂಡರು. 40ಆದ್ದರಿಂದ ಮೋಶೆಯು ಗಿಲ್ಯಾದನ್ನು
ಮನಸ್ಸೆಯ ಮಗನಾದ ಮಾಕೀರನ ಕುಲದವರಿಗೆ
ಕೊಟ್ಟನು. ಮಾಕೀರನ ಕುಲದವರು ಅಲ್ಲಿ ನೆಲೆಸಿದರು.
41ಮನಸ್ಸೆಯ ಕುಲದವನಾದ ಯಾಯೀರನು (ಅಮೋರಿ
ಯರ)ಕೋಟೆಗಳುಳ್ಳ ಹಳ್ಳಿಗಳನ್ನು ವಶಪಡಿಸಿಕೊಂಡು
ಅವುಗಳಿಗೆ, ''ಯಾಯೀರನ ಹಳ್ಳಿಗಳು'' ಎಂದು ಹೆಸರಿ
ಟ್ಟನು. 42ನೋಬಹ ಎಂಬವನು ಕೆನಾತ್ ಮತ್ತು ಅದರ
ಹತ್ತಿರವಿದ್ದ ಚಿಕ್ಕ ಊರುಗಳನ್ನು ವಶಪಡಿಸಿಕೊಂಡು
ಅವುಗಳಿಗೆ ''ನೋಬಹ'' ಎಂಬ ತನ್ನ ಹೆಸರನ್ನೇ
ಕೊಟ್ಟನು.

## ಈಜಿಪ್ಟಿನಿಂದ ಇಸ್ರೇಲರು ಪ್ರಯಾಣ ಮಾಡಿದ ಸ್ಥಳಗಳ ಪಟ್ಟಿ

33 ಮೋಶೆ ಮತ್ತು ಆರೋನರ ನೇತೃತ್ವದಲ್ಲಿ
ಈಜಿಪ್ಟ್ ದೇಶದಿಂದ ಹೊರಬಂದ ಇಸ್ರೇಲರ
ಪ್ರಯಾಣಗಳ ವಿವರ: 2ಮೋಶೆ ಯೆಹೋವನ ಅಪ್ಪಣೆ
ಯನ್ನು ಹೊಂದಿ ಇಸ್ರೇಲರು ಪ್ರಯಾಣಗಳಲ್ಲಿ ಇಳಿದು
ಕೊಂಡ ಸ್ಥಳಗಳ ಹೆಸರುಗಳನ್ನು ಬರೆದನು.

3ಮೊದಲನೆ ತಿಂಗಳಿನ ಹದಿನೈದನೆಯ ದಿನದಲ್ಲಿ ಅವರು
ರಮ್ಸೇಸ್ ಪಟ್ಟಣವನ್ನು ಬಿಟ್ಟು ಹೊರಟರು. ಪಸ್ಕಹಬ್ಬದ
ಮರುದಿನದಲ್ಲಿ ಇಸ್ರೇಲರು ಜಯದಲ್ಲಿ ತಮ್ಮ ಕೈಗಳನ್ನು
ಎತ್ತಿಕೊಂಡು ಈಜಿಪ್ಟಿನಿಂದ ಹೊರಗೆ ನಡೆದರು.
ಈಜಿಪ್ಟಿನ ಜನರೆಲ್ಲರೂ ಇದನ್ನು ನೋಡಿದರು. 4ಈಜಿಪ್ಟಿ
ನವರು ಯೆಹೋವನು ಕೊಂದುಹಾಕಿದ ತಮ್ಮ ಚೊಚ್ಚಲು
ಮಕ್ಕಳನ್ನು ಹೂಳಿಡುತ್ತಿದ್ದರು. ಯೆಹೋವನು ಈಜಿಪ್ಟಿನ
ದೇವರುಗಳನ್ನು ಶಿಕ್ಷಿಸಿದನು. 5ಇಸ್ರೇಲರು ರಮ್ಸೇಸ್
ನಿಂದ ಹೊರಟು ಸುಕ್ಕೋತಿಗೆ ಪ್ರಯಾಣಮಾಡಿ ಅಲ್ಲಿ

ಪಾಳೆಯ ಮಾಡಿಕೊಂಡರು. 6ಸುಕ್ಕೋತಿನಿಂದ ಅವರು
ಏತಾಮಿಗೆ ಪ್ರಯಾಣಮಾಡಿ ಅಲ್ಲಿ ಪಾಳೆಯ ಮಾಡಿ
ಕೊಂಡರು. ಜನರು ಅಲ್ಲಿ ಮರುಭೂಮಿಯ ಗಡಿಯಲ್ಲಿ
ಪಾಳೆಯಮಾಡಿಕೊಂಡರು. 7ಅವರು ಏತಾಮನ್ನು ಬಿಟ್ಟು
ಪೀಹಹೀರೋತಿಗೆ ಪ್ರಯಾಣಮಾಡಿ ಅಲ್ಲಿ ಪಾಳೆಯ
ಮಾಡಿಕೊಂಡರು. ಇದು ಬಾಳ್ಜೆಫೋನಿನ ಹತ್ತಿರವಿತ್ತು.
ಜನರು ಮಿಗ್ದೋಲಿನ ಬಳಿ ಪಾಳೆಯ ಮಾಡಿಕೊಂಡರು.
8ಜನರು ಪೀಹಹೀರೋತನ್ನು ಬಿಟ್ಟು ಸಮುದ್ರದ
ಮಧ್ಯದಲ್ಲೇ ನಡೆದು ಮರುಭೂಮಿಗೆ ಬಂದರು. ಅವರು
ಏತಾಮ್ ಮರುಭೂಮಿಯಲ್ಲಿ ಮೂರು ದಿನಗಳವರೆಗೆ
ಪ್ರಯಾಣಮಾಡಿ ಅಲ್ಲಿ ಪಾಳೆಯ ಮಾಡಿಕೊಂಡರು.
9ಜನರು ಮಾರಾವನ್ನು ಬಿಟ್ಟು ಏಲೀಮಿಗೆ ಪ್ರಯಾಣ
ಮಾಡಿ ಅಲ್ಲಿ ಇಳಿದುಕೊಂಡರು. ಅಲ್ಲಿ ಹನ್ನೆರಡು ನೀರಿನ
ಒರತೆಗಳೂ ಎಪ್ಪತ್ತು ಖರ್ಜೂರದ ಮರಗಳೂ ಇದ್ದವು.
10ಜನರು ಏಲೀಮನ್ನು ಬಿಟ್ಟು ಕೆಂಪುಸಮುದ್ರದ ಹತ್ತಿರ
ಪಾಳೆಯ ಮಾಡಿಕೊಂಡರು.
11ಕೆಂಪುಸಮುದ್ರದಿಂದ ಹೊರಟು ಸೀನ್ ಅರಣ್ಯದಲ್ಲಿ
ಪಾಳೆಯ ಮಾಡಿಕೊಂಡರು.
12ಸೀನ್ ಅರಣ್ಯದಿಂದ ಹೊರಟು ದೊಫ್ಕದಲ್ಲಿ ಇಳಿದು
ಕೊಂಡರು.
13ದೊಫ್ಕದಿಂದ ಹೊರಟು ಅಲೂಷಿನಲ್ಲಿ ಇಳಿದು
ಕೊಂಡರು.
14ಅಲೂಷಿನಿಂದ ಹೊರಟು ರೆಫೀದೀಮಿನಲ್ಲಿ ಇಳಿದು
ಕೊಂಡರು. ಅಲ್ಲಿ ಜನರಿಗೆ ಕುಡಿಯಲು ನೀರು ಇರಲಿಲ್ಲ.
15ರೆಫೀದೀಮಿನಿಂದ ಹೊರಟು ಸೀನಾಯಿ ಮರು
ಭೂಮಿಯಲ್ಲಿ ಇಳಿದುಕೊಂಡರು.
16ಸೀನಾಯಿ ಅರಣ್ಯದಿಂದ ಹೊರಟು ಕಿಬ್ರೋತ್
ಹತಾವದಲ್ಲಿ ಇಳಿದುಕೊಂಡರು.
17ಕಿಬ್ರೋತ್ ಹತಾವದಿಂದ ಹೊರಟು ಹಚೇರೋತಿ
ನಲ್ಲಿ ಇಳಿದುಕೊಂಡರು.
18ಹಚೇರೋತಿನಿಂದ ಹೊರಟು ರಿತ್ಮದಲ್ಲಿ ಇಳಿದು
ಕೊಂಡರು.
19ರಿತ್ಮದಿಂದ ಹೊರಟು ರಿಮ್ಮೋನ್ ಪೆರೆಚಿನಲ್ಲಿ
ಇಳಿದುಕೊಂಡರು.
20ರಿಮ್ಮೋನ್ ಪೆರೆಚಿನಿಂದ ಹೊರಟು ಲಿಬ್ನದಲ್ಲಿ
ಇಳಿದುಕೊಂಡರು.
21ಲಿಬ್ನದಿಂದ ಹೊರಟು ರಿಸ್ಸದಲ್ಲಿ ಇಳಿದುಕೊಂಡರು.
22ರಿಸ್ಸದಿಂದ ಹೊರಟು ಕೆಹೇಲಾತದಲ್ಲಿ ಇಳಿದು
ಕೊಂಡರು.
23ಕೆಹೇಲಾತದಿಂದ ಹೊರಟು ಶೆಫೆರ್ ಬೆಟ್ಟದಲ್ಲಿ
ಇಳಿದುಕೊಂಡರು.
24ಶೆಫೆರ್ ಬೆಟ್ಟದಿಂದ ಹೊರಟು ಹರಾದದಲ್ಲಿ
ಇಳಿದುಕೊಂಡರು.
25ಹರಾದದಿಂದ ಹೊರಟು ಮಖೇಲೋತಿನಲ್ಲಿ
ಇಳಿದುಕೊಂಡರು.
26ಮಖೇಲೋತಿನಿಂದ ಹೊರಟು ತಹತಿನಲ್ಲಿ ಇಳಿದು
ಕೊಂಡರು.
27ತಹತಿನಿಂದ ಹೊರಟು ತೆರಹದಲ್ಲಿ ಇಳಿದು
ಕೊಂಡರು.
28ತೆರಹದಿಂದ ಹೊರಟು ಮಿತ್ಕದಲ್ಲಿ ಇಳಿದು
ಕೊಂಡರು.
29ಮಿತ್ಕದಿಂದ ಹೊರಟು ಹಷ್ಮೋನದಲ್ಲಿ ಇಳಿದು
ಕೊಂಡರು.
30ಹಷ್ಮೋನದಿಂದ ಹೊರಟು ಮೋಸೇರೋತಿನಲ್ಲಿ
ಇಳಿದುಕೊಂಡರು.
31ಮೋಸೇರೋತಿನಿಂದ ಹೊರಟು ಬೆನೇಯಾಕಾನಿ
ನಲ್ಲಿ ಇಳಿದುಕೊಂಡರು.
32ಬೆನೇಯಾಕಾನಿನಿಂದ ಹೊರಟು ಹೋರ್ಹಗಿದ್ಗಾದ್
ನಲ್ಲಿ ಇಳಿದುಕೊಂಡರು.
33ಹೋರ್ಹಗಿದ್ಗಾದ್‌ನಿಂದ ಹೊರಟು ಯೊಟ್ಬಾತದಲ್ಲಿ
ಇಳಿದುಕೊಂಡರು.
34ಯೊಟ್ಬಾತದಿಂದ ಹೊರಟು ಅಬ್ರೋನದಲ್ಲಿ ಇಳಿದು
ಕೊಂಡರು.
35ಅಬ್ರೋನದಿಂದ ಹೊರಟು ಎಚ್ಯೋನ್‌ಗೆಬೆರಿನಲ್ಲಿ
ಇಳಿದುಕೊಂಡರು.
36ಎಚ್ಯೋನ್‌ಗೆಬೆರಿನಿಂದ ಹೊರಟು ಚಿನ್ ಮರು
ಭೂಮಿಯಲ್ಲಿ ಇಳಿದುಕೊಂಡರು. ಅದು ಕಾದೇಶ್.
37ಕಾದೇಶಿನಿಂದ ಹೊರಟು ಎದೋಮ್ಯರ ದೇಶದ
ಅಂಚಿನಲ್ಲಿರುವ ಹೋರ್‌ಬೆಟ್ಟದ ಬಳಿಯಲ್ಲಿ ಇಳಿದು
ಕೊಂಡರು. 38ಮಹಾಯಾಜಕನಾದ ಆರೋನನು
ಯೆಹೋವನಿಂದ ಆಜ್ಞಾಪಿಸಲ್ಪಟ್ಟ ಹೋರ್ ಬೆಟ್ಟವನ್ನು
ಹತ್ತಿದನು. ಇಸ್ರೇಲರು ಈಜಿಪ್ಟನ್ನು ಬಿಟ್ಟು ಹೊರಟ
ನಂತರ ನಲವತ್ತನೆ ವರ್ಷದ ಐದನೆ ತಿಂಗಳಿನ ಮೊದಲನೆ
ದಿನದಲ್ಲಿ ಆರೋನನು ಅಲ್ಲಿ ಪ್ರಾಣಬಿಟ್ಟನು.
39ಆರೋನನು 'ಹೋರ್' ಬೆಟ್ಟದಲ್ಲಿ ಸತ್ತಾಗ ಅವನಿಗೆ
ನೂರಿಪ್ಪತ್ಮೂರು ವರ್ಷ ವಯಸ್ಸಾಗಿತ್ತು.
40ಇಸ್ರೇಲರು ಬರುತ್ತಾರೆಂಬ ಸುದ್ದಿಯನ್ನು ನೆಗೆವ್
ನಲ್ಲಿ ವಾಸವಾಗಿದ್ದ ಅರಾದ್ ಪಟ್ಟಣದ ಅರಸನು ಕೇಳಿ
ದನು. 41ಇಸ್ರೇಲರು ಹೋರ್ ಬೆಟ್ಟದಿಂದ ಹೊರಟು
ಚಲ್ಮೋನದಲ್ಲಿ ಇಳಿದುಕೊಂಡರು.
42ಚಲ್ಮೋನದಿಂದ ಹೊರಟು ಪೂನೋನಿನಲ್ಲಿ
ಇಳಿದುಕೊಂಡರು. 43ಪೂನೋನಿನಿಂದ ಹೊರಟು
ಓಬೋತಿನಲ್ಲಿ ಇಳಿದುಕೊಂಡರು.
44ಓಬೋತಿನಿಂದ ಹೊರಟು ಮೋವಾಬ್ಯರ ಸರಹದ್ದಿ
ನಲ್ಲಿರುವ ಜೋರ್ಡನ್ ಆಚೆ ಇರುವ ಇಯ್ಯಿಮಿನಲ್ಲಿ
ಇಳಿದುಕೊಂಡರು.

[45]ಇಯ್ಯೀಮಿನಿಂದ ಹೊರಟು ದೀಬೋನ್‍ಗಾದಿನಲ್ಲಿ
ಇಳಿದುಕೊಂಡರು.
[46]ದೀಬೋನ್‍ಗಾದಿನಿಂದ ಹೊರಟು ಅಲ್ಮೋನ್
ದಿಬ್ಲಾತಯಿಮಿನಲ್ಲಿ ಇಳಿದುಕೊಂಡರು.
[47]ಅಲ್ಮೋನ್‍ದಿಬ್ಲಾತಯಿಮಿನಿಂದ ಹೊರಟು
ಅಬಾರೀಮ್ ಬೆಟ್ಟಗಳಲ್ಲಿರುವ ನೆಬೋವಿನ ಪೂರ್ವ
ದಿಕ್ಕಿನಲ್ಲಿ ಇಳಿದುಕೊಂಡರು. [48]ಅಬಾರೀಮ್ ಬೆಟ್ಟ
ಗಳಿಂದ ಹೊರಟು ಜೆರಿಕೋ ಪಟ್ಟಣದ ಆಚೆಕಡೆಯಲ್ಲಿ
ರುವ ಜೋರ್ಡನ್ ನದಿಯ ತೀರದಲ್ಲಿ ಮೋವಾಬಿನ
ಬಯಲಿನಲ್ಲಿ ಇಳಿದುಕೊಂಡರು. [49]ಅವರು ಮೋವಾ
ಬ್ಯರ ಮೈದಾನದಲ್ಲಿ ಬೇತ್‍ಯೆಷೀಮೋತಿನಿಂದ
ಅಬೇಲ್‍ಶಿಟ್ಟೀಮಿನವರೆಗೂ ಜೋರ್ಡನ್ ನದಿಯ
ತೀರದಲ್ಲಿ ಇಳಿದುಕೊಂಡರು.
[50]ಆ ಸ್ಥಳದಲ್ಲಿದ್ದಾಗ ಯೆಹೋವನು ಮೋಶೆಯೊಡನೆ
ಮಾತಾಡಿ ಹೇಳಿದ್ದೇನೆಂದರೆ: [51]''ನೀನು ಇಸ್ರೇಲರಿಗೆ
ಹೀಗೆ ಆಜ್ಞಾಪಿಸು, 'ನೀವು ಜೋರ್ಡನ್ ಹೊಳೆದಾಟಿ
ಕಾನಾನ್ ದೇಶವನ್ನು ಸೇರಿದಾಗ [52]ಆ ದೇಶದ ನಿವಾಸಿ
ಗಳನ್ನೆಲ್ಲ ಹೊರಡಿಸಿಬಿಟ್ಟು ಅವರ ಕೆತ್ತಿದ ಪ್ರತಿಮೆಗಳನ್ನು
ಮತ್ತು ಲೋಹದ ವಿಗ್ರಹಗಳನ್ನು ನಾಶಮಾಡಿ ಅವರ
ಪೂಜಾಸ್ಥಳಗಳನ್ನು ಹಾಳುಮಾಡಬೇಕು. [53]ನಾನು ನಿಮಗೆ
ಆ ದೇಶವನ್ನು ಸ್ವದೇಶವಾಗುವುದಕ್ಕೆ ಕೊಟ್ಟಿದ್ದೇನೆ. ನೀವು
ಅದನ್ನು ಸ್ವಾಧೀನ ಮಾಡಿಕೊಂಡು ಅದರಲ್ಲಿ ವಾಸಿಸ
ಬೇಕು. [54]ನೀವು ಚೀಟುಹಾಕಿ ಆ ದೇಶವನ್ನು ನಿಮ್ಮನಿಮ್ಮ
ಕುಲಗಳಿಗೆ ಹಂಚಿಕೊಳ್ಳಬೇಕು. ಹೆಚ್ಚು ಮಂದಿಯುಳ್ಳ
ಕುಲಕ್ಕೆ ಹೆಚ್ಚಾಗಿಯೂ ಕಡಿಮೆ ಮಂದಿಯುಳ್ಳ ಕುಲಕ್ಕೆ
ಕಡಿಮೆಯಾಗಿಯೂ ಸ್ವಾಸ್ಥ್ಯವು ದೊರೆಯಬೇಕು.
ಒಂದೊಂದು ಕುಲಕ್ಕೆ ಯಾವಯಾವ ಸ್ಥಳವನ್ನು ಸೂಚಿಸು
ತ್ತದೊ ಆ ಸ್ಥಳದಲ್ಲಿಯೇ ಆ ಕುಲದ ಸ್ವಾಸ್ಥ್ಯವಿರಬೇಕು.
ಒಂದೊಂದು ಕುಲದ ಕುಟುಂಬಗಳು ಒಂದೇ ಪ್ರದೇಶ
ದಲ್ಲಿರಬೇಕು.
[55] ''ನೀವು ಆ ದೇಶದ ನಿವಾಸಿಗಳನ್ನು ಹೊರಡಿಸದೆ
ಹೋದರೆ, ಅವರು ಉಳಿದುಕೊಂಡು ನಿಮ್ಮ ಕಣ್ಣುಗಳಲ್ಲಿ
ಮರದ ಚೂರಿನಂತೆಯೂ ನಿಮ್ಮ ಪಕ್ಕೆಗಳಲ್ಲಿ ಮುಳ್ಳು
ಗಳಂತೆಯೂ ಇರುವರು. ನೀವು ವಾಸಿಸುವ ದೇಶದಲ್ಲಿ
ನಿಮಗೆ ತೊಂದರೆ ಮಾಡುವರು. [56]ಅದಲ್ಲದೆ ನಾನು
ಅವರಿಗೆ ಮಾಡಲು ಯೋಚಿಸಿದಂತೆ ನಿಮಗೆ
ಮಾಡುವೆನು.''

### ಕಾನಾನಿನ ಮೇರೆಗಳು

34 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[2]''ನೀನು ಇಸ್ರೇಲರಿಗೆ ಹೀಗೆ ಆಜ್ಞಾಪಿಸಬೇಕು:
ನೀವು ಕಾನಾನ್‍ದೇಶವನ್ನು ಪ್ರವೇಶಿಸಿದಾಗ, ಇಡೀ
ಕಾನಾನ್ ದೇಶವನ್ನು ಅದರ ಗಡಿಗಳೊಡನೆ ನಿಮಗೆ ಸ್ವಾಸ್ಥ್ಯ
ವಾಗಿ ಕೊಡಲಾಗುವುದು. [3]ದಕ್ಷಿಣಭಾಗವು ಎದೋಮಿನ
ಗಡಿಯಲ್ಲಿರುವ ಚಿನ್ ಮರುಭೂಮಿಯನ್ನು ಒಳ
ಗೊಂಡಿದೆ. ಪೂರ್ವದ ಕಡೆಯಿರುವ ದಕ್ಷಿಣ ಗಡಿಯು
ಉಪ್ಪುಸಮುದ್ರದ ದಕ್ಷಿಣಭಾಗದಿಂದ ಆರಂಭ
ವಾಗುತ್ತದೆ. [4]ಅಲ್ಲಿಂದ ಅದು ಅಕ್ರಬ್ಬೀಮ್ ಕಣಿವೆಗೆ
ತಿರುಗಿಕೊಂಡು ಚಿನಿಗೆ ಮುಂದುವರಿಯುವುದು. ಅದರ
ಪರಿಮಿತಿ ದಕ್ಷಿಣ ಕಾದೇಶ್‍ಬರ್ನೇಯಾ. ಅಲ್ಲಿಂದ ಅದು
ಹಚರದ್ದಾರ್‌ಗೆ ಹೋಗಿ ಅಚ್ಮೋನಿಗೆ ಮುಂದುವರಿ
ಯುತ್ತದೆ. [5]ಗಡಿಯು ಅಚ್ಮೋನಿನಿಂದ ಈಜಿಪ್ಟಿನ ನದಿಯ
ಕಡೆಗೆ ತಿರುಗಿಕೊಂಡು ಸಮುದ್ರವನ್ನು ಸೇರುವುದು.
[6]ಪಶ್ಚಿಮದಿಕ್ಕಿನಲ್ಲಿ ಮೆಡಿಟೆರೇನಿಯನ್ ಸಮುದ್ರದ ತೀರ
ನಿಮ್ಮ ದೇಶದ ಮೇರೆಯಾಗಿರುವುದು. [7]ಉತ್ತರದಿಕ್ಕಿನ
ಮೇರೆ ಮೆಡಿಟೆರೇನಿಯನ್ ಸಮುದ್ರದಿಂದ ಹಿಡಿದು
ಲೆಬನೋನಿನಲ್ಲಿರುವ ಹೋರ್ ಬೆಟ್ಟದವರೆಗೂ ಇರು
ವುದು. [8]ಹೋರ್ ಬೆಟ್ಟದಿಂದ ಅದು ಲೆಬೊಹಮಾತಿಗೆ
ಹೋಗಿ ಅಲ್ಲಿಂದ ಚೆದಾದಿಗೆ ಹೋಗುವುದು. [9]ಬಳಿಕ ಆ
ಮೇರೆಯು ಜಿಫ್ರೋನಿಗೆ ಹೋಗಿ ಹಚರೇನಾನಿನಲ್ಲಿ
ಮುಗಿಯುವುದು. ಹೀಗೆ ಅದು ನಿಮ್ಮ ಉತ್ತರಮೇರೆ
ಯಾಗಿರುವುದು. [10]ನಿಮ್ಮ ಪೂರ್ವಮೇರೆಯು
ಹಚರೇನಾನಿನಿಂದ ಹೊರಟು ಶೆಫಾಮಿಗೆ ಹೋಗು
ವುದು. [11]ಶೆಫಾಮಿನಿಂದ ಆ ಮೇರೆಯು ಆಯಿನಿನ
ಪೂರ್ವದಲ್ಲಿರುವ ರಿಬ್ಲಕ್ಕೆ ಹೋಗಿ ಗಲಿಲೇಯ
ಸರೋವರದ ಪೂರ್ವದಲ್ಲಿರುವ ಬೆಟ್ಟಗಳನ್ನು ಮುಟ್ಟು
ವುದು. [12]ಬಳಿಕ ಈ ಮೇರೆಯು ಜೋರ್ಡನ್ ನದಿಯ
ಉದ್ದಕ್ಕೂ ಮುಂದುವರೆಯುವುದು. ಅದು ಉಪ್ಪು
ಸಮುದ್ರದಲ್ಲಿ ಕೊನೆಗೊಳ್ಳುವುದು. ಇವುಗಳೇ ನಿಮ್ಮ
ದೇಶದ ಸುತ್ತಲಿನ ಮೇರೆಗಳು.''
[13]ಮೋಶೆಯು ಇಸ್ರೇಲರಿಗೆ ಹೀಗೆ ಆಜ್ಞಾಪಿಸಿದನು:
''ನೀವು ಚೀಟುಹಾಕಿ ಭಾಗಮಾಡಿಕೊಳ್ಳುವ ದೇಶವೇ
ಇದು. ಒಂಭತ್ತುವರೆ ಕುಲಗಳವರಿಗೆ ಈ ದೇಶವನ್ನು
ಕೊಡಬೇಕೆಂದು ಯೆಹೋವನು ಆಜ್ಞಾಪಿಸಿದ್ದಾನೆ. [14-
15]ಬೇರೆ ಎರಡುವರೆ ಕುಲಗಳವರು ಅಂದರೆ ರೂಬೇನ್
ಕುಲ ಮತ್ತು ಗಾದ್ ಕುಲ ಮತ್ತು ಮನಸ್ಸೆಯ
ಅರ್ಧಕುಲವು ಜೆರಿಕೋ ಪಟ್ಟಣದ ಆಚೆಯಲ್ಲಿರುವ
ಜೋರ್ಡನ್ ನದಿಯ ಪೂರ್ವಭಾಗದಲ್ಲಿ ಈಗಾಗಲೇ
ಸ್ವಾಸ್ಥ್ಯವನ್ನು ಹೊಂದಿ ತಮ್ಮ ಕುಟುಂಬಗಳ ಪ್ರಕಾರ
ಹಂಚಿಕೊಂಡಿದ್ದಾರೆ.''
[16]ಆಗ ಯೆಹೋವನು ಮೋಶೆಗೆ ಆಜ್ಞಾಪಿಸಿ
ದ್ದೇನೆಂದರೆ: [17]''ನಿಮಗೋಸ್ಕರ ದೇಶವನ್ನು ಹಂಚಿ
ಕೊಡುವ ಕುಲಪ್ರಧಾನರು ಯಾರೆಂದರೆ: ಮಹಾ
ಯಾಜಕನಾದ ಎಲ್ಲಾಜಾರ್, ನೂನನ ಮಗನಾದ

ಯೆಹೋಶುವ[18]ಮತ್ತು ಪ್ರತಿಯೊಂದು ಕುಲದಿಂದ ಒಬ್ಬ
ಕುಲಪ್ರಧಾನ. [19]ಪ್ರತಿಯೊಂದು ಕುಲದಿಂದ ನೀವು
ನೇಮಿಸಬೇಕಾದವರು ಇವರೇ:

ಯೆಹೂದ ಕುಲದಿಂದ ಯೆಫುನ್ನೆಯ ಮಗನಾದ ಕಾಲೇಬ್.
20 ಸಿಮೆಯೋನ್ ಕುಲದಿಂದ ಅಮ್ಮೀಹೂದನ ಮಗನಾದ ಶೆಮೂವೇಲ್.
21 ಬೆನ್ಯಾಮೀನ್ ಕುಲದಿಂದ ಕಿಸ್ಲೋನನ ಮಗನಾದ ಎಲೀದಾದ್.
22 ದಾನ್ ಕುಲದಿಂದ ಯೊಗ್ಲೀಯ ಮಗನಾದ ಬುಕ್ಕೀ ಕುಲಾಧಿಪತಿ.
23 ಯೋಸೇಫನ ಸಂತತಿಯವರಲ್ಲಿ ಮನಸ್ಸೆ ಕುಲದಿಂದ ಏಫೋದನ ಮಗನಾದ ಹನ್ನೀಯೇಲ್ ಕುಲಾಧಿಪತಿ.
24 ಎಫ್ರಾಯೀಮ್ ಕುಲದಿಂದ ಶಿಫ್ಟಾನನ ಮಗನಾದ ಕೆಮೂವೇಲ್ ಕುಲಾಧಿಪತಿ.
25 ಜೆಬುಲೂನ್ ಕುಲದಿಂದ ಪರ್ನಾಕನ ಮಗನಾದ ಎಲೀಚಾಫಾನ್ ಕುಲಾಧಿಪತಿ.
26 ಇಸ್ಸಾಕಾರ್ ಕುಲದಿಂದ ಅಜ್ಜಾನನ ಮಗನಾದ ಪಲ್ಟೀಯೇಲ್ ಕುಲಾಧಿಪತಿ.
27 ಆಶೇರ್ ಕುಲದಿಂದ ಶೆಲೋಮಿಯ ಮಗನಾದ ಅಹೀಹೂದ್ ಕುಲಾಧಿಪತಿ.
28 ನಫ್ತಾಲಿ ಕುಲದಿಂದ ಅಮ್ಮೀಹೂದನ ಮಗನಾದ ಪೆದಹೇಲ್ ಕುಲಾಧಿಪತಿ.''

[29]ಕಾನಾನ್ ದೇಶದಲ್ಲಿ, ಇಸ್ರೇಲರಿಗೆ ಅವರವರ ಸ್ವಾಸ್ಥ್ಯ
ಗಳನ್ನು ಹಂಚಿಕೊಡುವುದಕ್ಕೆ ಯೆಹೋವನು ಇವರನ್ನೆಲ್ಲ
ನೇಮಿಸಿದನು.

## ಲೇವಿಯರ ಪಟ್ಟಣಗಳು

35 ಜೆರಿಕೋ ಪಟ್ಟಣದ ಆಚೆಕಡೆಯಲ್ಲಿ
ಜೋರ್ಡನ್ ನದಿಯ ತೀರದ ಬಳಿಯಿಂದ
ಮೋವಾಬ್ಯರ ಬಯಲಿನಲ್ಲಿ ಯೆಹೋವನು ಮೋಶೆ
ಯೊಡನೆ ಮಾತಾಡಿ ಹೇಳಿದ್ದೇನೆಂದರೆ, [2]''ಇಸ್ರೇಲರು
ತಾವು ಹೊಂದುವ ಸ್ವಾಸ್ಥ್ಯದಲ್ಲಿ ಕೆಲವು ಊರುಗಳನ್ನೂ ಆ
ಊರುಗಳ ಸುತ್ತಲಿರುವ ಭೂಮಿಯನ್ನೂ ಲೇವಿಯರಿಗೆ
ಕೊಡಬೇಕೆಂದು ಆಜ್ಞಾಪಿಸು. [3]ಅವರು ಆ ಪಟ್ಟಣಗಳಲ್ಲಿ
ವಾಸಿಸುವರು. ಆ ಊರುಗಳು ಲೇವಿಯರ ನಿವಾಸಕ್ಕಾಗಿ
ಸುತ್ತಲಿರುವ ಭೂಮಿಗಳು ಅವರ ಪಶುಗಳಿಗಾಗಿ ಮತ್ತು
ಇತರ ಪ್ರಾಣಿಗಳಿಗಾಗಿ ಇರುವವು. [4]ನೀವು ಲೇವಿಯರಿಗೆ
ಕೊಡುವ ಹುಲ್ಲುಗಾವಲುಗಳು ಅಂದರೆ ಪಟ್ಟಣಗಳ
ಸುತ್ತಲೂ ಇರುವ ಹುಲ್ಲುಗಾವಲುಗಳು ಪಟ್ಟಣದ
ಗೋಡೆಯ ಹೊರಗೆ ಎಲ್ಲಾ ದಿಕ್ಕಿನಲ್ಲೂ ಒಂದು ಸಾವಿರ
ಮೊಳ ವಿಸ್ತರಿಸಬೇಕು. [5]ಪಟ್ಟಣದ ಹೊರಗೆ ಪ್ರತಿ
ಯೊಂದು ದಿಕ್ಕಿನಲ್ಲಿ ಎರಡು ಸಾವಿರ ಮೊಳಗಳನ್ನು ಅಳೆದು
ಪಟ್ಟಣಕ್ಕೆ ಗಡಿಯನ್ನು ಗೊತ್ತುಪಡಿಸಬೇಕು; ಪೂರ್ವ
ದಿಕ್ಕಿನಲ್ಲಿ ಎರಡು ಸಾವಿರ ಮೊಳಗಳು; ದಕ್ಷಿಣದಿಕ್ಕಿನಲ್ಲಿ
ಎರಡು ಸಾವಿರ ಮೊಳಗಳು; ಪಶ್ಚಿಮದಿಕ್ಕಿನಲ್ಲಿ ಎರಡು
ಸಾವಿರ ಮೊಳಗಳು ಮತ್ತು ಉತ್ತರದಿಕ್ಕಿನಲ್ಲಿ ಎರಡು
ಸಾವಿರ ಮೊಳಗಳು. ಇವುಗಳ ಮಧ್ಯದಲ್ಲಿ ಪಟ್ಟಣವಿರ
ಬೇಕು. ಅದು ಅವರ ಪಟ್ಟಣಗಳಿಗೆ ಹುಲ್ಲುಗಾವಲು
ಗಳಾಗಿರುವುದು. [6]ನೀವು ಲೇವಿಯರಿಗೆ ಕೊಡುವ ಆರು
ಪಟ್ಟಣಗಳು ಆಶ್ರಯನಗರಗಳಾಗಿರುತ್ತವೆ. ಬೇರೊಬ್ಬ
ನನ್ನು ಕೊಂದು ಸಂರಕ್ಷಣೆಗಾಗಿ ಓಡಿಹೋಗುವವರು ಈ
ಪಟ್ಟಣಗಳಿಗೆ ಬಂದು ಸಂರಕ್ಷಣೆ ಪಡೆಯಲು ನೀವು
ಅವಕಾಶಕೊಡಬೇಕು. ಇದಲ್ಲದೆ ಇತರ ನಲವತ್ತೆರಡು
ಪಟ್ಟಣಗಳನ್ನು ನೀವು ಲೇವಿಯರಿಗೆ ಕೊಡಬೇಕು.
[7]ಅಂದರೆ ನೀವು ಲೇವಿಯರಿಗೆ ಒಟ್ಟು ನಲವತ್ತೆಂಟು
ಪಟ್ಟಣಗಳನ್ನು ಅವುಗಳ ಸುತ್ತಲಿರುವ ಹುಲ್ಲುಗಾವಲಿನ
ಸಮೇತವಾಗಿ ಕೊಡುತ್ತೀರಿ. [8]ನೀವು ಇತರ ಇಸ್ರೇಲರ
ಆಸ್ತಿಯಿಂದ ಲೇವಿಯರಿಗೆ ಪಟ್ಟಣಗಳನ್ನು ಕೊಡುವಾಗ,
ಪ್ರತಿಯೊಂದು ಕುಲವು ಹೊಂದಿರುವ ಭೂಮಿಗನು
ಸಾರವಾಗಿ ಕೊಡಬೇಕು. ದೊಡ್ಡಕುಲಗಳಿಂದ ಹೆಚ್ಚು
ಪಟ್ಟಣಗಳನ್ನೂ ಚಿಕ್ಕಕುಲಗಳಿಂದ ಕೆಲವು ಪಟ್ಟಣಗಳನ್ನೂ
ತೆಗೆದುಕೊಳ್ಳಿ.''

[9]ತರುವಾಯ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ, [10]''ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು.
ನೀವು ಜೋರ್ಡನ್ ನದಿಯನ್ನು ದಾಟಿ ಕಾನಾನ್
ದೇಶವನ್ನು ಸೇರಿದ ನಂತರ [11]ಆಶ್ರಯ ಸ್ಥಳಗಳಾಗು
ವುದಕ್ಕೆ ಪಟ್ಟಣಗಳನ್ನು ಆರಿಸಿಕೊಳ್ಳಬೇಕು. ಕೈತಪ್ಪಿ
ಮತ್ತೊಬ್ಬನನ್ನು ಕೊಂದವನು ಅವುಗಳಲ್ಲಿ ಒಂದಕ್ಕೆ
ಓಡಿಹೋಗಿ ಸುರಕ್ಷಿತನಾಗಿರಬಹುದು. [12]ಕೊಂದವನು
ನ್ಯಾಯವಿಚಾರಣಾಸಭೆಯ ಮುಂದೆ ನಿಂತುಕೊಳ್ಳು
ವುದಕ್ಕಿಂತ ಮೊದಲೇ ಕೊಲ್ಲಲ್ಪಟ್ಟವನ ಸಂಬಂಧಿಕನಿಂದ
ಕೊಲ್ಲಲ್ಪಡದೆ ಸುರಕ್ಷಿತನಾಗಿರಲು ಆ ಆಶ್ರಯ ಸ್ಥಳಗಳು
ನಿಮ್ಮ ಮಧ್ಯದಲ್ಲಿ ಇರಲೇಬೇಕು. [13-14]ಹೀಗೆ ಆಶ್ರಯ
ಸ್ಥಳಗಳಾಗಿರುವುದಕ್ಕೆ ನೀವು ಜೋರ್ಡನ್ ನದಿಯ ಈಚೆ
ಮೂರು ಮತ್ತು ಕಾನಾನ್ ದೇಶದಲ್ಲಿ ಮೂರು, ಹೀಗೆ
ಒಟ್ಟು ಆರು ಪಟ್ಟಣಗಳನ್ನು ನೇಮಿಸಬೇಕು. [15]ಕೈತಪ್ಪಿ
ಮತ್ತೊಬ್ಬನನ್ನು ಕೊಂದವನು ಇಸ್ರೇಲನಾಗಲೀ
ಪರದೇಶದವನಾಗಲೀ ನಿಮ್ಮಲ್ಲಿ ಇಳಿದುಕೊಂಡವ
ನಾಗಲೀ, ಆ ಆರು ಪಟ್ಟಣಗಳೊಳಗೆ ಒಂದಕ್ಕೆ ಓಡಿ
ಹೋಗಿ ಆಶ್ರಯ ಹೊಂದಬಹುದು.

16‘‘ಯಾವನಾದರೂ ಕಬ್ಬಿಣದ ಆಯುಧದಿಂದ
ಮತ್ತೊಬ್ಬನನ್ನು ಹೊಡೆದು ಕೊಂದರೆ ಅವನನ್ನು ಕೊಲೆ
ಗಾರನೆಂದು ನೀವು ತೀರ್ಮಾನಿಸಬೇಕು. ಅಂಥವನಿಗೆ
ಮರಣಶಿಕ್ಷೆಯಾಗಬೇಕು. 17ಯಾವನಾದರೂ ಮನುಷ್ಯ
ನನ್ನು ಕೊಲ್ಲುವಷ್ಟು ದೊಡ್ಡ ಕಲ್ಲನ್ನು ಕೈಯಲ್ಲಿ ಹಿಡಿದು
ಮತ್ತೊಬ್ಬನನ್ನು ಹೊಡೆದು ಕೊಂದರೆ, ಅವನು ನರಹತ್ಯ
ಮಾಡಿದವನಾಗಿದ್ದಾನೆ. ಅವನಿಗೆ ಮರಣ ಶಿಕ್ಷೆಯಾಗ
ಬೇಕು. 18ಯಾವನಾದರೂ ಮನುಷ್ಯನನ್ನು ಕೊಲ್ಲುವಷ್ಟು
ದೊಡ್ಡ ಮರದ ವಸ್ತುವನ್ನು ಕೈಯಲ್ಲಿ ಹಿಡಿದು ಮತ್ತೊಬ್ಬ
ನನ್ನು ಹೊಡೆದು ಕೊಂದರೆ, ಅವನು ಕೊಲೆಗಾರ, ಅವನಿಗೆ
ಮರಣಶಿಕ್ಷೆಯಾಗಬೇಕು. 19ಕೊಲ್ಲಲ್ಪಟ್ಟವನ ಸಮೀಪ
ಬಂಧುವು ಕೊಲೆಗಾರನನ್ನು ಮರಣಕ್ಕೀಡು ಮಾಡ
ಬೇಕು. ಅವನು ಕೊಲೆಗಾರನನ್ನು ಯಾವಾಗ ಕಂಡರೂ
ಅವನನ್ನು ಕೊಲ್ಲಬೇಕು.

20‘‘ಯಾವನಾದರೂ ಮತ್ತೊಬ್ಬನನ್ನು ದ್ವೇಷಿಸಿ
ನೂಕುವುದರಿಂದಾಗಲೀ ಉದ್ದೇಶಪೂರ್ವಕವಾಗಿ ಅವನ
ಮೇಲೆ ಏನಾದರೂ ಎಸೆಯುವುದರಿಂದಾಗಲೀ 21ದ್ವೇಷ
ದಿಂದ ಕೈಯಾರೆ ಹೊಡೆಯುವುದರಿಂದಾಗಲೀ ಕೊಂದರೆ
ಅವನು ನರಹತ್ಯ ಮಾಡಿದವನೇ. ಅವನಿಗೆ ಮರಣ
ಶಿಕ್ಷೆಯಾಗಬೇಕು. ಹತವಾದವನ ಸಮೀಪ ಬಂಧುವು
ಅವನನ್ನು ಎಲ್ಲಿ ಕಂಡರೂ ಕೊಲ್ಲಲಿ.

22ಆದರೆ ಒಬ್ಬನು ಯಾವ ದ್ವೇಷವೂ ಇಲ್ಲದೆ ನಿರು
ದ್ದೇಶದಿಂದ ಎಸೆದ ಯಾವುದೊ ವಸ್ತುವಿನಿಂದ ಒಬ್ಬನನ್ನು
ಕೊಂದರೆ, 23ಅಥವಾ ದೊಡ್ಡ ಕಲ್ಲನ್ನು ತಿಳಿಯದೆ
ಬೀಳಿಸಿದ್ದರಿಂದ ಮತ್ತೊಬ್ಬನು ಸತ್ತರೆ, ಅವನು ಕೊಲ್ಲಲ್ಪ
ಟ್ಟವನ ವೈರಿಯಾಗಿರದೆಯೂ ಹಾನಿಯನ್ನು ಮಾಡ
ಬೇಕೆಂಬ ಉದ್ದೇಶವಿಲ್ಲದೆಯೂ ಇದ್ದ ಪಕ್ಷಕ್ಕೆ
24ಸಭೆಯವರು ಕೊಂದವನಿಗೂ ಕೊಲ್ಲಲ್ಪಟ್ಟವನಿಗೂ ಈ
ನಿಯಮಗಳಿಗನುಸಾರವಾಗಿ ನ್ಯಾಯತೀರ್ಪು ನೀಡ
ಬೇಕು. 25(ಕೊಂದವನು ನಿರಪರಾಧಿಯೆಂದು ಸಾಬೀತಾ
ದರೆ) ಕೊಂದವನು ಓಡಿಹೋಗಿದ್ದ ಆಶ್ರಯ ನಗರಕ್ಕೆ
ಸಭೆಯವರು ಅವನನ್ನು ಮತ್ತೆ ಕರೆದುಕೊಂಡು ಹೋಗಿ
ಕೊಲ್ಲಲ್ಪಟ್ಟವನ ಸಮೀಪಬಂಧುವಿನಿಂದ ರಕ್ಷಿಸಬೇಕು.
ಅಭಿಷೇಕ ಹೊಂದಿದ ಮಹಾಯಾಜಕನು ಜೀವ
ದಿಂದಿರುವ ತನಕ ಅವನು ಆ ಪಟ್ಟಣದಲ್ಲೇ ವಾಸಿಸಬೇಕು.

26-27‘‘ಆ ವ್ಯಕ್ತಿಯು ತನ್ನ ಆಶ್ರಯನಗರದ ಮೇರೆ
ಯನ್ನು ಎಂದಿಗೂ ದಾಟಿ ಹೊರಗೆ ಹೋಗಬಾರದು. ಆ
ಮೇರೆಗಳನ್ನು ದಾಟಿ ಹೊರಗೆ ಹೋದರೆ, ಹತವಾದವನ
ಸಮೀಪಬಂದುವು ಅವನನ್ನು ಕಂಡು ಕೊಂದುಹಾಕಿದರೆ,
ಆಗ ಆ ಸಮೀಪಬಂಧು ನರಹತ್ಯ ಮಾಡಿದ ದೋಷಿ
ಯಾಗುವುದಿಲ್ಲ. 28ಮಹಾಯಾಜಕನು ಜೀವದಿಂದಿರುವ
ತನಕ ಅವನು ಆಶ್ರಯನಗರದೊಳಗೆ ಇರಬೇಕು. ಮಹಾ
ಯಾಜಕನು ತೀರಿಹೋದ ನಂತರ ಅವನು ತನ್ನ ಸ್ವಾಸ್ಥ್ಯ
ವಿರುವ ಸ್ಥಳಕ್ಕೆ ಹೋಗಬಹುದು. 29ನೀವೂ ನಿಮ್ಮ ಸಂತತಿ
ಯವರೂ ನಿಮ್ಮ ಎಲ್ಲಾ ನಿವಾಸ ಗಳಲ್ಲಿ ಈ ಕಟ್ಟಳೆಗೆ ಅನು
ಸಾರವಾಗಿ ನ್ಯಾಯತೀರಿಸಬೇಕು. 30ಯಾವನಾದರೂ
ಮತ್ತೊಬ್ಬನನ್ನು ಕೊಂದರೆ, ಸಾಕ್ಷ್ಯಾಧಾರಗಳು ಇದ್ದರೆ
ಮಾತ್ರ ಕೊಂದವನು ಕೊಲ್ಲಲ್ಪಡಬೇಕು.

31‘‘ಮರಣಶಿಕ್ಷೆಗೆ ಒಳಗಾಗಿರುವ ಕೊಲೆಪಾತಕನನ್ನು
ಉಳಿಸಲು ನೀವು ಯಾವ ಈಡನ್ನೂ ತೆಗೆದುಕೊಳ್ಳ
ಕೂಡದು. ಅವನಿಗೆ ಮರಣಶಿಕ್ಷೆಯೇ ಆಗಬೇಕು.

32‘‘ಆಶ್ರಯನಗರಕ್ಕೆ ಓಡಿಹೋದವನಿಂದ ಹಣವನ್ನು
ಈಡಾಗಿ ತೆಗೆದುಕೊಂಡು ಪ್ರಧಾನಯಾಜಕನು ಜೀವ
ದಿಂದಿರುವಾಗಲೇ ತನ್ನ ಸ್ವಂತ ಸ್ಥಳಕ್ಕೆ ಹೋಗಿ ವಾಸಿಸಲು
ನೀವು ಅವಕಾಶಕೊಡಕೂಡದು.

33‘‘ನೀವು ವಾಸವಾಗಿರುವ ದೇಶವನ್ನು ಕೆಡಿಸಬಾರದು.
ಕೊಲೆಯು ದೇಶವನ್ನು ಕೆಡಿಸುತ್ತದೆ. ಕೊಲೆಯು ನಡೆಯ
ಲ್ಪಟ್ಟಿರುವ ದೇಶಕ್ಕೆ ಕೊಲೆಗಾರನ ರಕ್ತವೇ ಹೊರತು ಬೇರೆ
ಯಾವ ಈಡೂ ಇಲ್ಲ. 34ನಾನು ವಾಸಿಸುವ ದೇಶವನ್ನು
ನೀವು ಅಶುದ್ಧಮಾಡಬಾರದು, ಯಾಕಂದರೆ ಯೆಹೋವ
ನಾದ ನಾನೇ ಇಸ್ರೇಲರೊಂದಿಗೆ ವಾಸಿಸುತ್ತೇನೆ.’’

## ಚಲ್ಪಹಾದನ ಹೆಣ್ಣುಮಕ್ಕಳ ಭೂಮಿ

36 ಒಂದು ದಿನ ಗಿಲ್ಯಾದ್ ಕುಲದ ಕುಟುಂಬಗಳ
ನಾಯಕರು ಮೋಶೆಯೊಡನೆಯೂ ಇತರ
ಇಸ್ರೇಲರ ಕುಟುಂಬಗಳ ನಾಯಕರೊಡನೆಯೂ
ಮಾತಾಡುವುದಕ್ಕೆ ಬಂದರು. (ಗಿಲ್ಯಾದನು ಮಾಕೀರನ
ಮಗ; ಮಾಕೀರನು ಮನಸ್ಸೆಯ ಮಗ; ಮನಸ್ಸೆಯು
ಯೋಸೇಫನ ಮಗ.) 2ಅವರು, ‘‘ಸ್ವಾಮೀ, ಚೀಟುಹಾಕಿ
ಇಸ್ರೇಲರಿಗೆ ದೇಶವನ್ನು ಹಂಚಿಕೊಡಬೇಕೆಂದು
ಯೆಹೋವನು ನಿಮಗೆ ಆಜ್ಞಾಪಿಸಿದ್ದಾನೆ. ಅದಲ್ಲದೆ ನಮ್ಮ
ಸಂಬಂಧಿಕನಾದ ಚಲ್ಪಹಾದನ ಭೂಮಿಯನ್ನು ಅವನ
ಹೆಣ್ಣುಮಕ್ಕಳಿಗೆ ಕೊಡಬೇಕಂದು ಯೆಹೋವನು ಆಜ್ಞಾ
ಪಿಸಿದ್ದಾನೆ. 3ಹೀಗಿರಲು ಅವರು ಇಸ್ರೇಲರ ಬೇರೆ ಯಾವ
ಕುಲದವರನ್ನಾದರೂ ಮದುವೆಯಾದರೆ ಅವರ ಸ್ವಾಸ್ಥ್ಯವು
ನಮ್ಮ ಪೂರ್ವಿಕರ ಕುಲದಿಂದ ತೆಗೆಯಲ್ಪಟ್ಟು ಅವರು
ಮದುವೆಯ ಮೂಲಕ ಸೇರಿಕೊಳ್ಳುವ ಕುಲಕ್ಕೆ ಹೋಗು
ವುದು. ಇದರಿಂದ ನಮ್ಮ ಸ್ವಾಸ್ಥ್ಯಕ್ಕೆ ನಷ್ಟವುಂಟಾಗುವುದು.
4ಇಸ್ರೇಲರ ಜೂಬಿಲಿ ಸಂವತ್ಸರವು ಬಂದಾಗ ಅವರ
ಸ್ವಾಸ್ಥ್ಯವು ಅವರು ಸೇರಿಕೊಳ್ಳುವ ಕುಲದ ಸ್ವಾಸ್ಥ್ಯಕ್ಕೆ ಕೂಡಿ
ಕೊಳ್ಳುವುದರಿಂದ ನಮ್ಮ ಕುಲದಿಂದ ತೆಗೆಯಲ್ಪಡು
ವುದು’’ ಎಂದು ಹೇಳಿದರು.

5ಆಗ ಮೋಶೆಯು ಯೆಹೋವನ ಅಪ್ಪಣೆಯನ್ನು
ಹೊಂದಿ ಇಸ್ರೇಲರಿಗೆ, ‘‘ಯೋಸೇಫನ ಸಂತತಿಯವರು

ಹೇಳುವುದು ನ್ಯಾಯ. [6]ಆದಕಾರಣ ಚಲ್ಪಹಾದನ ಹೆಣ್ಣು
ಮಕ್ಕಳು ಮದುವೆಯಾಗುವುದಾದರೆ ತಮ್ಮ ತಂದೆಯ
ಗೋತ್ರಕ್ಕೆ ಸಂಬಂಧಿಸಿದ ಯಾರನ್ನು ಬೇಕಾದರೂ
ಮದುವೆಯಾಗಬಹುದೆಂದು ಯೆಹೋವನು ಆಜ್ಞಾಪಿ
ಸಿದ್ದಾನೆ.

[7]ಇಸ್ರೇಲರ ಯಾವ ಸ್ವಾಸ್ತ್ಯವೂ ಒಂದು ಕುಲದಿಂದ
ಬೇರೊಂದು ಕುಲಕ್ಕೆ ಹೋಗಬಾರದು. ಇಸ್ರೇಲರೆಲ್ಲರೂ
ತಮ್ಮ ಪೂರ್ವಿಕರಿಂದ ಸ್ವಾಸ್ತ್ಯವಾಗಿ ಪಡೆದುಕೊಂಡ ತಮ್ಮ
ಗೋತ್ರದ ಭೂಮಿಯನ್ನು ತಮ್ಮ ಸ್ವಾಧೀನದಲ್ಲೇ ಇಟ್ಟು
ಕೊಂಡಿರಬೇಕು. [8]ಆದ್ದರಿಂದ ಇಸ್ರೇಲರ ಕುಲಗಳಲ್ಲಿ
ಭೂಮಿಯನ್ನು ಸ್ವಾಸ್ತ್ಯವಾಗಿ ಹೊಂದುವ ಪ್ರತಿಯೊಬ್ಬ
ಮಗಳು, ತನ್ನ ತಂದೆಯ ಗೋತ್ರದವನನ್ನೇ ಮದುವೆ
ಯಾಗಬೇಕು.

[9]ಹೀಗೆ ಯಾವ ಸ್ವಾಸ್ತ್ಯವೂ ಒಂದು ಕುಲದಿಂದ
ಬೇರೊಂದು ಕುಲಕ್ಕೆ ಹೋಗದೆ ಇಸ್ರೇಲರ ಪ್ರತಿ
ಯೊಂದು ಕುಲವೂ ತನ್ನ ಸ್ವಾಸ್ತ್ಯವನ್ನು ಹೊಂದಿಕೊಂಡೇ
ಇರುವುದು'' ಎಂದು ಹೇಳಿದನು.

[10]ಯೆಹೋವನು ಮೋಶೆಗೆ ಕೊಟ್ಟ ಆಜ್ಞೆಗೆ ಚಲ್ಪ
ಹಾದನ ಹೆಣ್ಣುಮಕ್ಕಳು ವಿಧೇಯರಾದರು. [11]ಆದ್ದರಿಂದ
ಚಲ್ಪಹಾದನ ಹೆಣ್ಣುಮಕ್ಕಳಾದ ಮಹ್ಲಾ, ತಿರ್ಚಾ, ಹೊಗ್ಲಾ,
ಮಿಲ್ಕಾ, ನೋವಾ ಎಂಬವರು ಯೆಹೋವನ ಆಜ್ಞಾನು
ಸಾರವಾಗಿ ನಡೆದು ತಂದೆಯ ಅಣ್ಣತಮ್ಮಂದಿರ ಗಂಡು
ಮಕ್ಕಳನ್ನು ಮದುವೆಯಾದರು.

[12]ಅವರು ಯೋಸೇಫನ ಮಗನಾದ ಮನಸ್ಸೆಯ ಕುಲ
ದವರನ್ನೇ ಮದುವೆಯಾದದ್ದರಿಂದ ಅವರ ಸ್ವಾಸ್ತ್ಯವು
ತಂದೆಯ ಕುಲದಲ್ಲಿಯೇ ನಿಂತಿತು. [13]ಜೆರಿಕೋ ಪಟ್ಟಣದ
ಎದುರಾಗಿರುವ ಜೋರ್ಡನ್ ನದಿಯ ಬಳಿಯಲ್ಲಿರುವ
ಮೋವಾಬಿನ ಬಯಲಿನಲ್ಲಿ ಯೆಹೋವನು ಇಸ್ರೇಲರಿಗೆ
ಮೋಶೆಯ ಮೂಲಕ ಕೊಟ್ಟ ಆಜ್ಞೆಗಳೂ ವಿಧಿಗಳೂ
ಇವೇ.

# ಧರ್ಮೋಪದೇಶಕಾಂಡ

## ಇಸ್ರೇಲರಿಗೆ ಮೋಶೆಯ ಸಂದೇಶ

1 ಇಸ್ರೇಲರಿಗೆ ಮೋಶೆಯು ಕೊಟ್ಟ ಸಂದೇಶ. ಆಗ
ಅವರು ಜೋರ್ಡನ್ ನದಿಯ ಪೂರ್ವದಿಕ್ಕಿನಲ್ಲಿರುವ
ಅಡವಿಯಲ್ಲಿ ಪಾಳೆಯ ಮಾಡಿಕೊಂಡಿದ್ದರು. ಇದು
ಸೂಫಿಗೆ ಎದುರಾಗಿತ್ತು. ಪಾರಾನಿನ ಮರುಭೂಮಿಗೂ
ತೋಫೆಲ್, ಲಾಬಾನ್, ಹಚೇರೋತ್ ಮತ್ತು
ದೀಜಾಹಾಬ್ ಪಟ್ಟಣಗಳ ನಡುವೆ ಇತ್ತು.
2ಹೋರೇಬ್ (ಸೀನಾಯಿ) ಪರ್ವತದಿಂದ ಸೇಯೀರ್
ಪರ್ವತ ಮಾರ್ಗವಾಗಿ ಕಾದೇಶ್ ಬರ್ನೇಯಕ್ಕೆ ತಲುಪಲು
ಹನ್ನೊಂದು ದಿವಸದ ಪ್ರಯಾಣ ಮಾಡಬೇಕಾಗುತ್ತದೆ.
3ಆದರೆ ಇಸ್ರೇಲರು ಈಜಿಪ್ಟನ್ನು ಬಿಟ್ಟು ಈ ಸ್ಥಳಕ್ಕೆ ಬರಲು
ನಲವತ್ತು ವರ್ಷಗಳು ಹಿಡಿದವು. ನಲವತ್ತನೆ ವರ್ಷದ
ಹನ್ನೊಂದನೆಯ ತಿಂಗಳಿನ ಮೊದಲನೆಯ ದಿನದಲ್ಲಿ
ಮೋಶೆಯು ಜನರೊಂದಿಗೆ ಮಾತಾಡಿ ಯೆಹೋವನು
ಆಜ್ಞಾಪಿಸಿದ ಸಮಸ್ತ ವಿಷಯಗಳನ್ನು ತಿಳಿಸಿದನು.
4ಸೀಹೋನನನ್ನು ಮತ್ತು ಓಗನನ್ನು ದೇವರಾದ
ಯೆಹೋವನು ಸೋಲಿಸಿದ ಬಳಿಕ ನಡೆದ ಸಂಗತಿಯಿದು.
(ಸೀಹೋನನು ಅಮೋರಿಯರ ರಾಜನಾಗಿದ್ದನು.
ಅವನು ಹೆಷ್ಬೋನಿನಲ್ಲಿ ವಾಸಿಸುತ್ತಿದ್ದನು. ಓಗನು ಬಾಷಾ
ನಿನ ಅರಸನು. ಇವನು ಅಷ್ಟಾರೋತ್ ಮತ್ತು ಎದ್ರೈ
ಎಂಬಲ್ಲಿ ವಾಸವಾಗಿದ್ದನು. 5ಇಸ್ರೇಲರು ಜೋರ್ಡನ್
ನದಿಯ ಪೂರ್ವದಿಕ್ಕಿನಲ್ಲಿ ಮೋವಾಬ್ಯರ ಸ್ಥಳದಲ್ಲಿ
ಪಾಳೆಯ ಮಾಡಿಕೊಂಡಿದ್ದರು. ದೇವರು ತಿಳಿಸಿದ ಕಟ್ಟಳೆ
ಗಳನ್ನು ಮೋಶೆಯು ವಿವರಿಸುತ್ತಾ ಹೀಗಂದನು:
6‘‘ನಮ್ಮ ದೇವರಾದ ಯೆಹೋವನು ಹೋರೇಬ್
ಬೆಟ್ಟದಲ್ಲಿ ನಮ್ಮೊಂದಿಗೆ ಮಾತಾಡಿದನು. ಆತನು ಹೇಳಿ
ದ್ದೇನೆಂದರೆ ‘ನೀವು ಈ ಪ್ರದೇಶಕ್ಕೆ ಬಂದು 7ಬಹಳ ಕಾಲ
ವಾಯಿತು, ಅಮೋರಿಯರು ವಾಸಿಸುವ ಬೆಟ್ಟಪ್ರಾಂತ್ಯ
ಗಳಿಗೆ ಹೋಗಿರಿ. ಅದರ ಸುತ್ತಲೂ ಇರುವ ಜೋರ್ಡನಿನ
ಬಯಲು ಪ್ರದೇಶಕ್ಕೆ ಬೆಟ್ಟಪ್ರದೇಶಕ್ಕೆ, ಪಶ್ಚಿಮದ
ಇಳಕಲುಪ್ರದೇಶಕ್ಕೆ, ನೆಗೆವ್ ಮತ್ತು ಸಮುದ್ರ ಕರಾವಳಿ
ಪ್ರದೇಶಗಳಿಗೆ ಹೋಗಿರಿ. ಕಾನಾನ್ ಮತ್ತು
ಲೆಬನೋನ್ ಪ್ರದೇಶಗಳ ಮೂಲಕ ಯೂಫ್ರೇಟೀಸ್
ಮಹಾನದಿಯವರೆಗೂ ಹೋಗಿರಿ. 8ನಾನು ನಿಮಗೆ ಆ
ಪ್ರಾಂತ್ಯವನ್ನೆಲ್ಲಾ ಕೊಡುವೆನು. ಅಲ್ಲಿಗೆ ಹೋಗಿ ಅದನ್ನು
ತೆಗೆದುಕೊಳ್ಳಿರಿ. ನಿಮ್ಮ ಪೂರ್ವಿಕರಾದ ಅಬ್ರಹಾಮನಿಗೆ,
ಇಸಾಕನಿಗೆ ಮತ್ತು ಯಾಕೋಬನಿಗೆ ಅವರ ಸಂತತಿಯ
ವರಿಗೆ ಆ ಪ್ರದೇಶವನ್ನು ಕೊಡುವೆನು ಎಂದು ನಾನು
ವಾಗ್ದಾನ ಮಾಡಿದ್ದೇನೆ.’’’

## ಮೋಶೆಯಿಂದ ನಾಯಕರ ಆಯ್ಕೆ

9ಮೋಶೆಯು, ‘‘ಆ ಸಮಯದಲ್ಲಿ ನಾನು ನಿಮಗೆ
ನಿಮ್ಮನ್ನು ಪರಾಂಬರಿಸಲು ನನಗೆ ಸಾಧ್ಯವಿಲ್ಲ ಎಂದು
ಹೇಳಿದೆನು. 10ಈಗ ನಿಮ್ಮ ಜನಸಂಖ್ಯೆಯು ಇನ್ನೂ ಅಧಿಕ
ವಾಗಿರುತ್ತದೆ. ದೇವರಾದ ಯೆಹೋವನು ನಿಮ್ಮನ್ನು ವೃದ್ಧಿ
ಪಡಿಸುತ್ತಿರುವುದರಿಂದ ನೀವು ಈಗ ಆಕಾಶದ ನಕ್ಷತ್ರ
ಗಳಷ್ಟು ಇರುವಿರಿ. 11ನಮ್ಮ ಪೂರ್ವಿಕರ ದೇವರಾದ
ಯೆಹೋವನು ಈಗ ಇರುವುದಕ್ಕಿಂತ ಸಾವಿರಪಟ್ಟು ಅಧಿಕ
ವಾಗಿ ನಿಮ್ಮ ಜನಸಂಖ್ಯೆಯನ್ನು ಹೆಚ್ಚಿಸಲಿ. ತನ್ನ ವಾಗ್ದಾನ
ಕ್ಕನುಸಾರವಾಗಿ ನಿಮ್ಮನ್ನು ಆಶೀರ್ವದಿಸಲಿ. 12ಆದರೆ
ನಾನೇ ಸ್ವತಃ ನಿಮ್ಮನ್ನು ಪರಾಂಬರಿಸುವುದಕ್ಕಾಗಲೀ ನಿಮ್ಮ
ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವುದಕ್ಕಾಗಲೀ ಸಾಧ್ಯ
ವಾಗಲಿಲ್ಲ. 13ಆಗ ನಾನು ನಿಮಗೆ ಹೇಳಿದ್ದೇನೆಂದರೆ,
‘ನಿಮ್ಮ ನಿಮ್ಮ ಕುಲಗಳಿಂದ ಯೋಗ್ಯರಾದವರನ್ನು ಆರಿ
ಸಿರಿ. ಅವರನ್ನು ನಿಮ್ಮ ನಾಯಕರನ್ನಾಗಿ ನೇಮಿಸುವೆನು.
ಅವರು ವಿವೇಕಿಗಳಾಗಿಯೂ ಅನುಭವಶಾಲಿಗ
ಳಾಗಿಯೂ ಇರಬೇಕು’ ಎಂದು ಹೇಳಿದೆನು. 14‘‘ಆಗ
ನೀವು, ‘ಇದು ಒಳ್ಳೆಯ ಆಲೋಚನೆ’ ಎಂದು ಹೇಳಿದಿರಿ.
15‘‘ಆದ್ದರಿಂದ, ನಿಮ್ಮ ಕುಲಗಳಿಂದ ನೀವು ಆರಿಸಿ
ಕೊಂಡ ಬುದ್ಧಿವಂತರಾದ ಮತ್ತು ಅನುಭವಸ್ಥರಾದ ಜನ
ರನ್ನು ನಾನು ನೇಮಿಸಿದೆನು. ಈ ರೀತಿಯಾಗಿ ಅವರನ್ನು
ಸಾವಿರ ಜನರ ಮೇಲೆಯೂ, ನೂರು ಜನರ
ಮೇಲೆಯೂ, ಐವತ್ತು ಜನರ ಮೇಲೆಯೂ, ಮತ್ತು ಹತ್ತು
ಜನರ ಮೇಲೆಯೂ ನಾಯಕರನ್ನಾಗಿ ನೇಮಿಸಿದೆನು.
ಅಲ್ಲದೆ ನಿಮ್ಮ ನಿಮ್ಮ ಕುಲಗಳಿಗೆ ಪ್ರಧಾನರನ್ನೂ
ನೇಮಿಸಿದೆನು.

16‘‘ನಿಮ್ಮ ನ್ಯಾಯಗಳನ್ನು ತೀರಿಸುವ, ‘ಆ ನಾಯಕರು
ಗಳಿಗೆ ಹೇಳಿದ್ದೇನೆಂದರೆ: ನಿಮ್ಮ ಅಧೀನದಲ್ಲಿರುವ ಜನರ
ದೂರುಗಳನ್ನು ಚೆನ್ನಾಗಿ ಕೇಳಿಕೊಂಡು ಪಕ್ಷಪಾತವಿಲ್ಲದೆ
ನ್ಯಾಯತೀರಿಸಬೇಕು. ಅವರಿಬ್ಬರೂ ಇಸ್ರೇಲರೇ ಆಗಿರ
ಬಹುದು; ಅಥವಾ ಒಬ್ಬನು ಇಸ್ರೇಲನೂ ಮತ್ತೊಬ್ಬನು
ಪರದೇಶಿಯೂ ಆಗಿರಬಹುದು. ನೀವು ಪ್ರತಿಯೊಂದು
ದೂರನ್ನು ನ್ಯಾಯವಾಗಿ ಬಗೆಹರಿಸಿ ತೀರ್ಪು ನೀಡಬೇಕು.
17ನ್ಯಾಯತೀರಿಸುವಾಗ ಒಬ್ಬನು ಇನ್ನೊಬ್ಬನಿಗಿಂತ
ವಿಶೇಷ ವ್ಯಕ್ತಿಯಾಗಿದ್ದಾನೆ ಎಂಬುದನ್ನು ಲೆಕ್ಕಿಸದೆ
ಇಬ್ಬರೂ ಸಮಾನರೆಂದು ಪರಿಗಣಿಸಿ ಸರಿಯಾದ ತೀರ್ಪು
ಕೊಡಬೇಕು. ನೀವು ಯಾರಿಗೂ ಭಯಪಡಬೇಡಿರಿ.
ಯಾಕಂದರೆ ನಿಮ್ಮ ತೀರ್ಪು ದೇವರಿಂದ ಬಂದ ತೀರ್ಪಾಗಿ
ರುತ್ತದೆ. ನಿಮಗೆ ಬಗೆಹರಿಸಲು ಕಷ್ಟವಾಗುವ ದೂರುಗ
ಳಿದ್ದಲ್ಲಿ ಅವುಗಳನ್ನು ನನ್ನ ಬಳಿಗೆ ತನ್ನಿರಿ. ಅವುಗಳಿಗೆ ನಾನು
ನ್ಯಾಯತೀರ್ಪು ನೀಡುವೆನು, 18ಅದೇ ಸಮಯದಲ್ಲಿ,
ನೀವು ಮಾಡತಕ್ಕ ಬೇರೆ ಎಲ್ಲಾ ಸಂಗತಿಗಳನ್ನೂ ನಾನು
ನಿಮಗೆ ತಿಳಿಸಿದೆನು.

### ಕಾನಾನ್ ದೇಶಕ್ಕೆ ಗೂಢಚಾರರನ್ನು ಕಳುಹಿಸಿದ್ದು

19‘‘ನಾವು ಬಳಿಕ ನಮ್ಮ ದೇವರಾದ ಯೆಹೋವನ
ಆಜ್ಞಾನುಸಾರವಾಗಿ ಹೋರೇಬ್ ಬೆಟ್ಟಪ್ರದೇಶವನ್ನು
ಬಿಟ್ಟು ಅಮೋರಿಯರ ಗುಡ್ಡಗಾಡು ಪ್ರದೇಶದಲ್ಲಿ
ಪ್ರಯಾಣಮಾಡುತ್ತಾ ನೀವು ನೋಡಿದ ಅತ್ಯಂತ ಭಯಂ
ಕರವಾದ ಮತ್ತು ವಿಶಾಲವಾದ ಮರುಭೂಮಿಯನ್ನು
ದಾಟಿ ಕಾದೇಶ್‌ಬರ್ನೇಯಕ್ಕೆ ಬಂದೆವು. 20ಆಗ ನಾನು
ನಿಮಗೆ ಹೇಳಿದ್ದೇನೆಂದರೆ , ‘ನೀವೀಗ ಅಮೋರಿಯರ
ಬೆಟ್ಟಪ್ರದೇಶಕ್ಕೆ ಬಂದಿರುವಿರಿ. ನಮ್ಮ ದೇವರಾದ
ಯೆಹೋವನು ಈ ದೇಶವನ್ನು ನಮಗೆ ಕೊಡುವನು.
21ದೇಶ ನಿಮ್ಮೆದುರಿಗೇ ಇದೆ, ಎದ್ದು ವಶಪಡಿಸಿಕೊಳ್ಳಿರಿ.
ನಿಮ್ಮ ಪೂರ್ವಿಕರ ದೇವರಾದ ಯೆಹೋವನು ಹೀಗೆಯೇ
ಆಜ್ಞಾಪಿಸಿದ್ದಾನೆ. ಆದುದರಿಂದ ಭಯಪಡಬೇಡಿ;
ಯಾವುದಕ್ಕೂ ಹೆದರಬೇಡಿ!’
22‘‘ಆದರೆ ನೀವೆಲ್ಲಾ ನನ್ನ ಬಳಿಗೆ ಬಂದು, ‘ಆ ದೇಶ
ವನ್ನು ಸಂಚರಿಸಿ ಅದರ ಬಲವುಳ್ಳ ಮತ್ತು ಬಲಹೀನ ಸ್ಥಳ
ಗಳನ್ನು ನೋಡಿಕೊಂಡು ನಾವು ಯಾವ ಮಾರ್ಗವಾಗಿ
ಹೋಗಬೇಕು ಮತ್ತು ಯಾವ ಯಾವ ಪಟ್ಟಣಗಳನ್ನು
ದಾಟಬೇಕು ಎಂಬುದನ್ನು ನಮಗೆ ತಿಳಿಸಲು ನಮ್ಮಲ್ಲಿ
ಕೆಲವರನ್ನು ಕಳುಹಿಸಿ’’ ಎಂದು ಹೇಳಿದಿರಿ.
23‘‘ಇದು ಒಂದು ಒಳ್ಳೆಯ ಆಲೋಚನೆ ಎಂದು
ಕೊಂಡು ನಿಮ್ಮ ಕುಲಗಳಿಂದ ಹನ್ನೆರಡು ಮಂದಿಯನ್ನು
ಆರಿಸಿಕೊಂಡೆನು. 24ಅವರು ಹೊರಟುಹೋಗಿ ಬೆಟ್ಟ
ಪ್ರದೇಶಗಳನ್ನು ದಾಟಿ ಎಷ್ಕೋಲ್ ಕಣಿವೆಯನ್ನೆಲ್ಲಾ
ಸಂಚರಿಸಿ ವಿಷಯಗಳನ್ನು ಸಂಗ್ರಹಿಸಿದರು. 25ಅಲ್ಲಿ
ಬೆಳೆಯುವ ಹಣ್ಣುಗಳನ್ನು ಕಿತ್ತು ನಮ್ಮ ಬಳಿಗೆ ತಂದರು.
ಅವರು ಆ ದೇಶದ ವಿಷಯವಾಗಿ ತಿಳಿಸಿದರು. ‘ನಮ್ಮ
ದೇವರಾದ ಯೆಹೋವನು ನಮಗೆ ಒಳ್ಳೆಯ ದೇಶವನ್ನು
ಕೊಡುತ್ತಿದ್ದಾನೆ!’ ಅಂದರು.
26‘‘ಆದರೆ ನೀವು ದೇಶದೊಳಗೆ ಪ್ರವೇಶಿಸಿ ಸ್ವಾಧೀನ
ಮಾಡಿಕೊಳ್ಳಲಿಲ್ಲ; ನಿಮ್ಮ ದೇವರಾದ ಯೆಹೋವನ
ಮಾತನ್ನು ಕೇಳಲಿಲ್ಲ. 27ನಿಮ್ಮ ನಿಮ್ಮ ಗುಡಾರಗಳಲ್ಲಿ
ಯೆಹೋವನ ವಿರುದ್ಧವಾಗಿ ಗೊಣಗುಟ್ಟಿದ್ದೀರಿ, ‘ನಮ್ಮ
ಯೆಹೋವನು ನಮ್ಮನ್ನು ದ್ವೇಷಿಸುತ್ತಾನೆ! ನಮ್ಮನ್ನು
ಈಜಿಪ್ಟ್ ದೇಶದಿಂದ ಹೊರತಂದು ಅಮೋರಿಯರಿಂದ
ನಾಶಪಡಿಸುತ್ತಿದ್ದಾನೆ! 28ನಾವೀಗ ಎಲ್ಲಿಗೆ ಹೋಗೋಣ?
ನಮ್ಮ ಸಹೋದರರು (ಹನ್ನೆರಡು ಮಂದಿ ಗೂಢಾ
ಚಾರರು) ತಮ್ಮ ವರದಿಯಿಂದ ನಮ್ಮನ್ನು ಹೆದರಿಸಿದ್ದಾರೆ.
ಅಲ್ಲಿಯ ಜನರು ದೃಢಕಾಯರೂ ಬಲಶಾಲಿಗಳೂ ಎತ್ತರ
ವಾದ ಪುರುಷರೂ ಆಗಿದ್ದಾರೆ. ಅವರ ಪಟ್ಟಣಗಳು ದೊಡ್ಡ
ವುಗಳಾಗಿದ್ದು ಅವುಗಳ ಗೋಡೆಗಳು ಆಕಾಶಕ್ಕೆ ಮುಟ್ಟು
ವಷ್ಟು ಎತ್ತರವಾಗಿವೆ. ನಾವು ಅಲ್ಲಿ ಅನಾಕ್ಯರೆಂಬ ಮಹಾ
ಶರೀರಗಳನ್ನು ನೋಡಿದೆವು!’ ಎಂದು ಅವರು ಹೇಳಿದಾಗ
ನಾವು ಭಯದಿಂದ ತತ್ತರಿಸಿದೆವು.
29‘‘ಆಗ ನಾನು, ‘ನೀವು ಕಳವಳಗೊಳ್ಳಬೇಡಿರಿ! ಆ ಜನ
ರಿಗೆ ಭಯಪಡಬೇಡಿರಿ! 30ನಿಮ್ಮ ದೇವರಾದ
ಯೆಹೋವನು ನಿಮ್ಮ ಮುಂದೆ ಹೋಗಿ ಅವರೊಂದಿಗೆ
ಯುದ್ಧಮಾಡುವನು. ಈಜಿಪ್ಟ್‌ನಲ್ಲಿ ಆತನು ಮಾಡಿ
ದಂತೆಯೇ ಇಲ್ಲಿಯೂ ಮಾಡುವನು. 31ಅಡವಿಗಳ
ಲ್ಲಿಯೂ ಮರುಭೂಮಿಗಳಲ್ಲಿಯೂ ಮನುಷ್ಯನು ತನ್ನ
ಮಗುವನ್ನು ಹೊತ್ತುಕೊಂಡು ತರುವಂತೆ ದೇವರಾದ
ಯೆಹೋವನು ನಿಮ್ಮನ್ನು ಹೊತ್ತುಕೊಂಡು ತಂದಿದ್ದಾನೆ.
ಈ ಸ್ಥಳಕ್ಕೆ ಸುರಕ್ಷಿತವಾಗಿ ನಿಮ್ಮನ್ನು ತಂದು
ಮುಟ್ಟಿಸಿದ್ದಾನೆ.’
32‘‘ಆದರೂ ನೀವು ಇನ್ನೂ ನಿಮ್ಮ ದೇವರಾದ
ಯೆಹೋವನ ಮೇಲೆ ಭರವಸೆ ಇಡಲಿಲ್ಲ. 33ನೀವು
ಪ್ರಯಾಣಮಾಡುತ್ತಿರುವಾಗ ಆತನು ನಿಮ್ಮ ಮುಂದೆ
ಹೋದನು. ತಂಗಲು ಯೋಗ್ಯವಾದ ಸ್ಥಳದಲ್ಲಿ ನೀವು
ಪಾಳೆಯ ಮಾಡಿಕೊಳ್ಳುವಂತೆ ಮಾಡಿದನು. ಹಗಲಲ್ಲಿ
ಮೇಘಸ್ತಂಭವಾಗಿಯೂ ರಾತ್ರಿಯಲ್ಲಿ ಅಗ್ನಿಸ್ತಂಭ
ವಾಗಿಯೂ ಆತನು ನಿಮಗೆ ಮಾರ್ಗದರ್ಶಕನಾಗಿದ್ದನು.

### ಜನರನ್ನು ಕಾನಾನ್ ದೇಶದೊಳಗೆ ಹೋಗದಂತೆ ಮಾಡಿದ್ದು

34‘‘ನೀವು ಹೇಳುತ್ತಿದ್ದದನ್ನು ಯೆಹೋವನು ಕೇಳಿ
ಸಿಟ್ಟುಗೊಂಡು, 35‘ಈಗ ಜೀವಿಸುತ್ತಿರುವ ದುಷ್ಟಜನರಾದ

ನಿಮ್ಮಲ್ಲಿ ಯಾರೂ ನಾನು ನಿಮ್ಮ ಪೂರ್ವಿಕರಿಗೆ ವಾಗ್ದಾನ
ಮಾಡಿದ ಒಳ್ಳೆಯನಾಡಿಗೆ ಹೋಗುವುದಿಲ್ಲ.
36ಯೆಫುನ್ನೆಯ ಮಗನಾದ ಕಾಲೇಬನು ಮಾತ್ರ ಆ ದೇಶ
ವನ್ನು ನೋಡುವನು. ಕಾಲೇಬನು ಸಂಚರಿಸಿದ ನಾಡನ್ನು
ಅವನಿಗೂ ಅವನ ಸಂತತಿಯವರಿಗೂ ಕೊಡುವೆನು.
ಯಾಕಂದರೆ ನಾನು ಆಜ್ಞಾಪಿಸಿದ್ದನ್ನೆಲ್ಲ ಕಾಲೇಬನು
ಮಾಡಿದನು' ಎಂದು ಪ್ರಮಾಣಮಾಡಿದನು.
37‘‘ದೇವರಾದ ಯೆಹೋವನು ನಿಮ್ಮಿಂದಾಗಿ ನನ್ನ
ಮೇಲೂ ಸಿಟ್ಟುಗೊಂಡು ‘ಮೋಶೆಯೇ, ‘ನೀನು ಸಹ
ವಾಗ್ದಾನದ ದೇಶವನ್ನು ಪ್ರವೇಶಿಸುವುದಿಲ್ಲ. 38ಆದರೆ ನಿನ್ನ
ಸಹಾಯಕನಾದ ನೂನನ ಮಗನಾದ ಯೆಹೋಶುವನು
ಆ ದೇಶವನ್ನು ಪ್ರವೇಶಿಸುವನು. ಯೆಹೋಶುವನನ್ನು
ಪ್ರೋತ್ಸಾಹಿಸು; ಯಾಕಂದರೆ ಆ ದೇಶವನ್ನು ವಶಪಡಿಸಿ
ಕೊಳ್ಳಲು ಅವನು ಇಸ್ರೇಲರನ್ನು ಮುನ್ನಡೆಸಬೇಕು'
ಎಂದು ಹೇಳಿದನು.
39‘‘ದೇವರಾದ ಯೆಹೋವನು ನಮಗೆ ಹೇಳಿದ್ದೇ
ನೆಂದರೆ, ‘ವೈರಿಗಳ ಪಾಲಾಗುವರೆಂದು ನೀವು ಹೇಳಿದ
ನಿಮ್ಮ ಮನೆಯವರೂ ಒಳ್ಳೆಯದು ಮತ್ತು ಕೆಟ್ಟದ್ದು ಅರಿ
ಯದ ನಿಮ್ಮ ಮಕ್ಕಳಿಗೆ ಆ ದೇಶವನ್ನು ಕೊಡುವೆನು;
ಅವರು ಆ ದೇಶವನ್ನು ಸ್ವಾಧೀನಮಾಡಿಕೊಳ್ಳುವರು.
40ಆದರೆ ನೀವು ಹಿಂತಿರುಗಿ ಕೆಂಪು ಸಮುದ್ರಕ್ಕೆ ಹೋಗುವ
ಮರುಭೂಮಿಯ ಮಾರ್ಗದಲ್ಲಿ ಹೋಗಬೇಕು.'
41‘‘ಆಗ ನೀವು ಹೀಗೆ ಹೇಳಿದಿರಿ, ‘ಮೋಶೆಯೇ, ನಾವು
ಯೆಹೋವನಿಗೆ ವಿರುದ್ಧವಾಗಿ ಪಾಪ ಮಾಡಿದೆವು. ದೇವ
ರಾದ ಯೆಹೋವನು ನಮಗೆ ಆಜ್ಞೆಮಾಡಿದ ಪ್ರಕಾರ
ನಾವು ಈಗ ಹೋಗಿ ಅವರೊಂದಿಗೆ ಯುದ್ಧಮಾಡು
ತ್ತೇವೆ.' ಆಮೇಲೆ ನೀವು ಪ್ರತಿಯೊಬ್ಬರೂ ಆಯುಧ
ಗಳನ್ನು ಧರಿಸಿಕೊಂಡಿರಿ. ಬೆಟ್ಟ ಪ್ರದೇಶಗಳನ್ನು ಜಯಿ
ಸುವುದು ಸುಲಭವೆಂದು ನೀವು ಭಾವಿಸಿದ್ದೀರಿ.
42‘‘ಆದರೆ ಯೆಹೋವನು ನನಗೆ ಹೇಳಿದ್ದೇನೆಂದರೆ:
‘ಆ ಜನರಿಗೆ ಬೆಟ್ಟವನ್ನೇರಿ ಯುದ್ಧಮಾಡಬಾರದೆಂದು
ಹೇಳು. ಯಾಕಂದರೆ ನಾನು ಅವರೊಂದಿಗಿರುವುದಿಲ್ಲ
ಮತ್ತು ಅವರ ವೈರಿಗಳು ಅವರನ್ನು ಸೋಲಿಸಿ ಬಿಡುವರು!'
43‘‘ನಾನು ನಿಮ್ಮೊಂದಿಗೆ ಮಾತನಾಡಿದರೂ ನೀವು ನನ್ನ
ಮಾತನ್ನು ಕೇಳಲಿಲ್ಲ. ನೀವು ಯೆಹೋವನ ಆಜ್ಞೆಗೆ
ವಿಧೇಯರಾಗಲು ಒಪ್ಪಲಿಲ್ಲ. ನೀವು ನಿಮ್ಮ ಸ್ವಂತ ಶಕ್ತಿ
ಯಿಂದ ಜಯಹೊಂದುವುದಾಗಿ ಭಾವಿಸಿ ಬೆಟ್ಟಪ್ರದೇಶ
ವನ್ನು ಏರಿದಿರಿ. 44ಆದರೆ ಅಲ್ಲಿ ವಾಸಿಸುತ್ತಿದ್ದ ಅಮೋರಿ
ಯರು ಹೊರಗೆ ಬಂದು ಜೇನುಹುಳಗಳಂತೆ ನಿಮ್ಮನ್ನು
ಮುತ್ತಿ ಸೇಯೀರಿನಿಂದ ಹೊರ್ಮದ ತನಕ ನಿಮ್ಮನ್ನು
ಓಡಿಸಿದರು. 45ಆಗ ನೀವು ಹಿಂತಿರುಗಿ ಬಂದು
ಯೆಹೋವನ ಸಹಾಯಕ್ಕಾಗಿ ಮೊರೆಯಿಟ್ಟದ್ದೀರಿ. ಆದರೆ
ಯೆಹೋವನು ನಿಮಗೆ ಕಿವಿಗೊಡಲಿಲ್ಲ. 46ಹೀಗೆ ನೀವು
ಕಾದೇಶಿನಲ್ಲಿ ತುಂಬ ದಿನಗಳನ್ನು ಕಳೆದಿರುವಿರಿ.

## ಮರುಭೂಮಿಯಲ್ಲಿ ಇಸ್ರೇಲರ ಅಲೆದಾಟ

2 ‘‘ಆಗ ಯೆಹೋವನು ನನಗೆ ಆಜ್ಞಾಪಿಸಿದಂತೆ ನಾವು
ಮರುಭೂಮಿಗೆ ತಿರುಗಿಹೋದೆವು. ಆ ಮಾರ್ಗವು
ಕೆಂಪುಸಮುದ್ರದ ಕಡೆಹೋಗುತ್ತಿತ್ತು. ಸೇಯೀರ್ ಬೆಟ್ಟ
ವನ್ನು ಸುತ್ತಿಕೊಂಡು ಹೋಗುವುದಕ್ಕೆ ನಮಗೆ ತುಂಬಾ
ದಿವಸಗಳಾದವು. 2ಆಗ ಯೆಹೋವನು ನನಗೆ ಹೀಗೆ ಹೇಳಿ
ದನು: 3‘‘ನೀವು ಬೆಟ್ಟದ ಸುತ್ತ ಸುತ್ತುತ್ತಾ ಬಹಳ ದಿವಸ
ಗಳನ್ನು ಕಳೆದಿರಿ. ಈಗ ನೀವು ಉತ್ತರದಿಕ್ಕಿಗೆ ತಿರುಗಿರಿ.
4ಇದನ್ನು ಜನರಿಗೆ ತಿಳಿಸು. ನೀವು ಸೇಯಿರ್‌ದೇಶದ
ಮೂಲಕ ದಾಟಿಹೋಗುವಿರಿ. ಇದು ನಿಮ್ಮ ಸಂಬಂಧಿಕರ
ದೇಶ. ಇವರು ಏಸಾವನ ಸಂತತಿಯವರು. ಅವರು ನಿಮಗೆ
ಭಯಪಡುವರು; ಆದರೆ ನೀವು ಅವರ ವಿಷಯದಲ್ಲಿ
ಎಚ್ಚರಿಕೆಯಾಗಿರಿ. 5ಅವರ ವಿರುದ್ಧ ಯುದ್ಧ ಮಾಡ
ಬಾರದು. ನಾನು ನಿಮಗೆ ಅವರ ದೇಶದಲ್ಲಿ ಯಾವ
ಪಾಲನ್ನೂ ಕೊಡುವುದಿಲ್ಲ, ಅದರ ಒಂದು ಅಡಿ ಜಾಗ
ವನ್ನೂ ಕೊಡುವುದಿಲ್ಲ. ಯಾಕಂದರೆ ಸೇಯೀರ್ ಬೆಟ್ಟ
ಪ್ರದೇಶವನ್ನು ಏಸಾವನ ಸ್ವಂತ ದೇಶವನ್ನಾಗಿ ಕೊಟ್ಟಿರು
ತ್ತೇನೆ. 6ನೀವು ಅವರ ದೇಶವನ್ನು ದಾಟುವಾಗ ಅವರ
ಆಹಾರ ಸಾಮಾಗ್ರಿಗಳಿಗೂ ನೀರಿಗೂ ಹಣವನ್ನು ಕೊಡ
ಬೇಕು. 7ನಿಮ್ಮ ದೇವರಾದ ಯೆಹೋವನು ಪ್ರತಿ
ಯೊಂದು ವಿಷಯದಲ್ಲಿ ನಿಮ್ಮನ್ನು ಆಶೀರ್ವದಿಸಿದ್ದನ್ನು
ನೆನಪಿಗೆ ತಂದುಕೊಳ್ಳಿರಿ. ಈ ಮಹಾ ಮರುಭೂಮಿಯ
ಮೂಲಕ ನೀವು ನಡೆದುಹೋದದ್ದರ ಬಗ್ಗೆಯೂ ಆತನಿಗೆ
ತಿಳಿದಿದೆ. ಕಳೆದ ನಲವತ್ತು ವರ್ಷಗಳಿಂದ ದೇವರು
ನಿಮ್ಮೊಂದಿಗಿದ್ದು ನಿಮ್ಮನ್ನು ನಡಿಸಿದ್ದಾನೆ. ನಿಮಗೆ
ಬೇಕಾದವುಗಳನ್ನೆಲ್ಲಾ ಒದಗಿಸಿರುತ್ತಾನೆ.'
8‘‘ಹಾಗೆ ನಾವು ನಮ್ಮ ಸಂಬಂಧಿಕರಾದ ಏಸಾವನ
ಜನರ ದೇಶದ ಮೂಲಕ ಪ್ರಯಾಣ ಬೆಳೆಸಿದೆವು.
ಜೋರ್ಡನ್ ಕಣಿವೆಯಿಂದ ಏಲತ್ ಮತ್ತು ಎಚ್ಯೋನ್ಗೆ
ಬೆರ್ ಪಟ್ಟಣಗಳಿಗೆ ಹೋಗುವ ಮಾರ್ಗವನ್ನು ಬಿಟ್ಟು,
ನಾವು ಮೋವಾಬ್‌ದೇಶದ ಮರುಭೂಮಿಗೆ ಹೋಗುವ
ರಸ್ತೆಯಲ್ಲಿ ನಡೆದೆವು.

## ಆರ್‌ನಲ್ಲಿ ಇಸ್ರೇಲರು

9‘‘ಯೆಹೋವನು ನನಗೆ ಹೀಗೆ ಹೇಳಿದನು,
‘ಮೋವಾಬಿನ ಜನರಿಗೆ ತೊಂದರೆ ಕೊಡಬೇಡ. ಅವರ
ವಿರುದ್ಧ ಯುದ್ಧಕ್ಕೆ ಹೋಗಬೇಡ; ಅವರ ದೇಶದಲ್ಲಿ
ನಿಮಗೆ ಯಾವ ಪಾಲೂ ಸಿಗದು. ಅವರು ಲೋಟನ
ಸಂತತಿಯವರು. ನಾನು ಅವರಿಗೆ ಆರ್ ಪಟ್ಟಣವನ್ನು
ಕೊಟ್ಟಿರುತ್ತೇನೆ.''

[10](ಹಿಂದಿನ ಕಾಲದಲ್ಲಿ, ಏಮಿಯ ಜನರು ಆರ್‌ನಲ್ಲಿ
ವಾಸ ಮಾಡುತ್ತಿದ್ದರು. ಅವರು ಬಲಾಢ್ಯರೂ ಉನ್ನತ
ಪುರುಷರೂ ಆಗಿದ್ದರು ಮತ್ತು ಅವರ ಸಂಖ್ಯೆ ಹೆಚ್ಚಾಗಿತ್ತು.
[11]ಅವರು ಅನಾಕ್ಯರಂತೆ ರೆಫಾಯರಿಗೆ ಸೇರಿದವರೆಂದು
ಹೇಳಲಾಗುತ್ತಿತ್ತು. ಆದರೆ ಮೋವಾಬ್ಯರು ಅವರನ್ನು
ಏಮಿಯರು ಎಂದೇ ಕರೆಯುತ್ತಿದ್ದರು. [12]ಹೋರಿಯರು
ಕೂಡಾ ಸೇಯೀರ್ ಪ್ರಾಂತ್ಯದಲ್ಲಿ ವಾಸಿಸುತ್ತಿದ್ದರು.
ಆದರೆ ಏಸಾವನ ಜನರು ಅವರಿಂದ ದೇಶವನ್ನು ವಶ
ಮಾಡಿಕೊಂಡು, ಹೋರಿಯರನ್ನು ಹತಿಸಿ ಆ ದೇಶದಲ್ಲಿ
ನೆಲೆಸಿದರು. ಇಸ್ರೇಲರೂ ಅದೇ ರೀತಿಯಲ್ಲಿ
ಯೆಹೋವನು ವಾಗ್ದಾನ ಮಾಡಿದ ದೇಶದಲ್ಲಿದ್ದ ನಿವಾಸಿ
ಗಳನ್ನು ಸೋಲಿಸಿ ಅವರ ದೇಶವನ್ನು ಸ್ವಾಧೀನ
ಮಾಡಿಕೊಂಡರು.)

[13]"ಯೆಹೋವನು ನನಗೆ, 'ಜೆರೆದ್ ಕಣಿವೆಯ ಆಚೆ
ಕಡೆಗೆ ಹೋಗು' ಎಂದು ಹೇಳಿದನು. ಆದುದರಿಂದ ನಾವು
ಜೆರೆದ್ ಕಣಿವೆಯನ್ನು ದಾಟಿದೆವು. [14]ಕಾದೇಶ್
ಬರ್ನೇಯದಿಂದ ಜೆರೆದ್‌ಕಣಿವೆಯನ್ನು ದಾಟಿ ಆಗಲೇ
ಮೂವತ್ತೆಂಟು ವರುಷಗಳು ದಾಟಿದ್ದವು. ನಮ್ಮ ಸಮೂಹ
ದಲ್ಲಿದ್ದ ಯುದ್ಧ ಭಟರೆಲ್ಲಾ ಸತ್ತು ಹೋಗಿದ್ದರು. ಹೀಗೆ
ಆಗುವುದೆಂದು ದೇವರು ಪ್ರಮಾಣ ಮಾಡಿದ್ದನು.
[15]ಯೆಹೋವನು ಅವರಿಗೆ ವಿರುದ್ಧವಾಗಿ ಇದ್ದುದರಿಂದ
ಅವರೆಲ್ಲಾ ಸತ್ತು ಜನಸಮೂಹದಿಂದ ಇಲ್ಲವಾದರು.

[16]"ಯುದ್ಧಭಟರೆಲ್ಲಾ ಸತ್ತುಹೋದ ಬಳಿಕ
[17]ಯೆಹೋವದೇವರು ನನಗೆ ಹೇಳಿದ್ದೇನೆಂದರೆ: [18]'ಈ
ಹೊತ್ತು ಆರ್ ಎಂಬ ಪಟ್ಟಣದ ಗಡಿಯನ್ನು ದಾಟಿ
ಮೋವಾಬ್‌ದೇಶವನ್ನು ಪ್ರವೇಶಿಸಬೇಕು. [19]ನೀನು
ಅಮ್ಮೋನಿಯರ ಬಳಿಗೆ ಹೋಗಬೇಕು. ಆದರೆ ಅವರಿಗೆ
ತೊಂದರೆ ಕೊಡಬೇಡ. ಅವರೊಂದಿಗೆ ಯುದ್ಧಮಾಡ
ಬೇಡ. ಯಾಕಂದರೆ ಅವರ ದೇಶದಲ್ಲಿ ನಿನಗೆ ಪಾಲಿಲ್ಲ.
ಅವರು ಲೋಟನ ಸಂತತಿಯವರು, ಆ ದೇಶವನ್ನು ನಾನು
ಅವರಿಗೆ ಕೊಟ್ಟಿರುತ್ತೇನೆ."

[20]ಆ ಪ್ರದೇಶವನ್ನು ರೆಫಾಯ ದೇಶವೆಂದೂ ಕರೆಯು
ತ್ತಾರೆ. ಹಿಂದಿನ ಕಾಲದಲ್ಲಿ ರೆಫಾಯರು ಅಲ್ಲಿ ವಾಸಿಸುತ್ತಿ
ದ್ದರು. ಅಮ್ಮೋನಿಯರು ಅವರನ್ನು ಜಂಜುಮ್ಯರು
ಎಂದು ಕರೆಯುತ್ತಿದ್ದರು. [21]ಜಂಜುಮ್ಯರು ತುಂಬಾ ಬಲ
ಶಾಲಿಗಳಾಗಿದ್ದರು; ಅನಾಕ್ಯರಂತೆ ಉನ್ನತಪುರುಷ
ರಾಗಿದ್ದರು. ಆದರೆ ಯೆಹೋವನು ಜಂಜುಮ್ಯರನ್ನು
ಸೋಲಿಸುವಂತೆ ಅಮೋರಿಯರಿಗೆ ಸಹಾಯ ಮಾಡಿ
ದನು. ಅಮೋರಿಯರು ಆ ದೇಶವನ್ನು ತಮ್ಮ ಸ್ವಾಧೀನಕ್ಕೆ
ತೆಗೆದುಕೊಂಡು ಈಗ ಅದರಲ್ಲಿ ನೆಲೆಸಿರುತ್ತಾರೆ.
[22]ಏಸಾವನ ಜನರಿಗೂ ದೇವರು ಅದೇ ರೀತಿ ಮಾಡಿದನು.
ಹಿಂದಿನ ಕಾಲದಲ್ಲಿ ಹೋರಿಯರು ಸೇಯೀರ್‌ನಲ್ಲಿ ವಾಸಿ
ಸುತ್ತಿದ್ದರು. ಆದರೆ ಏಸಾವನ ಜನರು ಅವರನ್ನು ಸೋಲಿಸಿ
ದರು. ಅವನ ಸಂತತಿಯವರು ಈಗಲೂ ಅಲ್ಲಿ ವಾಸ
ಮಾಡುತ್ತಿದ್ದಾರೆ. [23]ಕಫ್ತೋರ್ಯದವರಿಗೂ ದೇವರು
ಅದೇ ರೀತಿ ಮಾಡಿದ್ದನು. ಗಾಜದ ಸುತ್ತಲೂ ಪಟ್ಟಣಗ
ಳಲ್ಲಿ ಅವ್ವಿಯ ಜನರು ವಾಸಿಸುತ್ತಿದ್ದರು. ಆದರೆ ಕಫ್ತೋ
ರಿಂದ ಬಂದ ಜನರು ಅವ್ವಿಯರನ್ನು ನಾಶಮಾಡಿ ಅವರ
ದೇಶದಲ್ಲಿ ಈಗಲೂ ಅವರು ವಾಸಿಸಿರುತ್ತಾರೆ.

## ಅಮೋರಿಯರೊಂದಿಗೆ ಯುದ್ಧ

[24]"ಯೆಹೋವನು ನನಗೆ ಹೇಳಿದ್ದೇನೆಂದರೆ:
'ಅರ್ನೋನ್ ಕಣಿವೆಯನ್ನು ದಾಟಲು ಸಿದ್ಧಪಡಿಸಿಕೊ.
ಅಮೋರಿಯನೂ ಹೆಷ್ಬೋನಿನ ರಾಜನೂ ಆಗಿರುವ
ಸೀಹೋನನನ್ನು ಸೋಲಿಸಲು ನಾನು ನಿನಗೆ ಸಹಾಯ
ಮಾಡುವೆನು. ಅವನ ರಾಜ್ಯವನ್ನು ನಾನು ನಿನಗೆ ಕೊಡು
ವೆನು. ಅದುದರಿಂದ ಅವನಿಗೆ ವಿರುದ್ಧವಾಗಿ ಯುದ್ಧ
ಮಾಡಿ ದೇಶವನ್ನು ಸ್ವಾಧೀನಪಡಿಸಿಕೋ. [25]ಸುತ್ತಲಿರುವ
ಜನಾಂಗಗಳು ನಿಮಗೆ ಹೆದರಿ ನಡುಗುವಂತೆ ನಾನು
ಮಾಡುತ್ತಿದ್ದೇನೆ. ಅವರು ನಿಮ್ಮ ಬಗ್ಗೆ ಸುದ್ದಿಯನ್ನು ಕೇಳಿ
ಹೆದರಿಕೊಳ್ಳುವರು ಮತ್ತು ಭಯದಿಂದ ನಡುಗುವರು.'

[26]"ನಾವು ಕೆದೇಮೋತಿನ ಮರುಭೂಮಿಯಲ್ಲಿರು
ವಾಗ ಹೆಷ್ಬೋನಿನ ಅರಸನಾದ ಸೀಹೋನನಿಗೆ ದೂತ
ರನ್ನು ಸಂದೇಶದೊಂದಿಗೆ ಕಳುಹಿಸಿದೆನು. ಆ ದೂತರು
ಸಮಾಧಾನವನ್ನು ತಂದಿದ್ದರು. [27]ಅವರು ಸೀಹೋನನಿಗೆ,
'ನಿನ್ನ ರಾಜ್ಯವನ್ನು ನಾವು ದಾಟುವಂತೆ ನಮಗೆ ಅಪ್ಪಣೆ
ಕೊಡು. ನಾವು ಮಾರ್ಗದಲ್ಲಿ ಬಲಕ್ಕಾಗಲೀ ಎಡಕ್ಕಾಗಲೀ
ಹೋಗುವುದಿಲ್ಲ. [28]ನಾವೇನಾದರೂ ನಿನ್ನ ದೇಶದ
ಆಹಾರ ಪದಾರ್ಥಗಳನ್ನು ತೆಗೆದುಕೊಂಡರೆ, ನೀರನ್ನು
ಉಪಯೋಗಿಸಿದರೆ ಅದಕ್ಕೆ ಪ್ರತಿಯಾಗಿ ಬೆಳ್ಳಿಯನ್ನು
ಪಾವತಿ ಮಾಡುವೆವು. ನಿಮ್ಮ ದೇಶದ ಮೂಲಕ
ನಾವು ಹಾದು ಹೋಗಬೇಕಾಗಿದೆಯಷ್ಟೇ. [29]ನಾವು
ಜೋರ್ಡನ್ ನದಿಯನ್ನು ದಾಟುವವರೆಗೆ ನಿಮ್ಮ ದೇಶದ
ಮೂಲಕ ಹೋಗಿ, ನಮ್ಮ ದೇವರಾದ ಯೆಹೋವನು
ಕೊಡಲಿರುವ ದೇಶವನ್ನು ಪ್ರವೇಶಿಸುತ್ತೇವೆ. ಸೇಯೀರ್
ನಲ್ಲಿ ವಾಸಿಸುವ ಏಸಾವನ ಜನರೂ, ಆರ್‌ನಲ್ಲಿ ವಾಸಿಸುವ
ಮೋವಾಬ್ಯರೂ ತಮ್ಮ ದೇಶಗಳ ಮೂಲಕ ಹೋಗಲು
ನಮಗೆ ಅವಕಾಶ ಮಾಡಿಕೊಟ್ಟಿದ್ದಾರೆ.'

[30]"ಆದರೆ ಸೀಹೋನನು ನಮಗೆ ದಾಟಿಹೋಗಲು
ಬಿಡಲಿಲ್ಲ. ನಮ್ಮ ದೇವರಾದ ಯೆಹೋವನು ಅವನ
ಹೃದಯದಲ್ಲಿ ಕಲ್ಲಾಗಿ ಮಾಡಿದನು. ನಾವು ಅವನನ್ನು
ಸೋಲಿಸಬೇಕೆಂದೇ ಯೆಹೋವನು ಹಾಗೆ ಮಾಡಿದನು.
ಈ ದಿನ ಏನಾಯಿತೆಂದು ನಾವು ತಿಳಿದಿದ್ದೇವೆ.

[31]‘‘ಯೆಹೋವನು ನನಗೆ, ‘ನಾನು ನಿನಗೆ ಸೀಹೋನ
ನನ್ನೂ ಅವನ ಎಲ್ಲಾ ಜನರನ್ನೂ ಅವನ ದೇಶವನ್ನೂ ನಿನಗೆ
ಕೊಡುತ್ತೇನೆ. ಈಗ ಹೋಗಿ ಅವನ ದೇಶವನ್ನು ವಶ
ಪಡಿಸಿಕೋ!’ ಎಂದು ಹೇಳಿದನು.
[32]‘‘ಅನಂತರ ಸೀಹೋನ್ ಅರಸನೂ ಅವನ ಜನರೂ
ನಮ್ಮೊಂದಿಗೆ ಕಾದಾಡಲು ಯಹಜ ಎಂಬ ಸ್ಥಳಕ್ಕೆ
ಬಂದರು. [33]ಆದರೆ ನಮ್ಮ ದೇವರಾದ ಯೆಹೋವನು
ಅವನನ್ನು ನಮ್ಮ ವಶಕ್ಕೆ ಕೊಟ್ಟನು. ನಾವು ಸೀಹೋನ್
ಅರಸನನ್ನು ಅವನ ಮಕ್ಕಳನ್ನೂ ಅವನ ಎಲ್ಲಾ ಜನರನ್ನು
ಸದೆಬಡೆದು ಸೋಲಿಸಿದೆವು. [34]ಅವನಿಗೆ ಒಳಪಟ್ಟ ಪಟ್ಟಣ
ಗಳನ್ನೆಲ್ಲಾ ವಶಪಡಿಸಿಕೊಂಡೆವು. ಪ್ರತಿಯೊಂದು ಪಟ್ಟಣ
ದಲ್ಲಿದ್ದ ಗಂಡಸರು ಹೆಂಗಸರು ಮಕ್ಕಳನ್ನೆಲ್ಲಾ ಸಂಪೂರ್ಣ
ವಾಗಿ ನಾಶಮಾಡಿದೆವು. ಯಾರನ್ನೂ ಜೀವಂತವಾಗಿ
ಉಳಿಸಲಿಲ್ಲ. [35]ಅವರ ದನಕರುಗಳನ್ನು ಮತ್ತು ಅವರ
ಲ್ಲಿದ್ದ ಬೆಲೆಬಾಳುವ ವಸ್ತುಗಳನ್ನು ಸೂರೆಮಾಡಿದೆವು.
[36]ನಾವು ಅರ್ನೋನ್‌ಕಣಿವೆಯ ಅಂಚಿನಲ್ಲಿದ್ದ ಅರೋ
ಯೇರ್ ಎಂಬ ಊರನ್ನು ಮತ್ತು ಆ ಕಣಿವೆಯ ಮಧ್ಯ
ದಲ್ಲಿದ್ದ ಇನ್ನೊಂದು ಊರನ್ನು ವಶಪಡಿಸಿಕೊಂಡೆವು.
ಅರ್ನೋನ್ ಕಣಿವೆ ಮತ್ತು ಗಿಲ್ಯಾದ್‌ಗಳ ನಡುವೆ ಇರುವ
ಎಲ್ಲಾ ಪಟ್ಟಣಗಳನ್ನು ಸೋಲಿಸಲು ಯೆಹೋವನು ಅವ
ಕಾಶ ಮಾಡಿಕೊಟ್ಟನು. ಯಾವ ಪಟ್ಟಣವೂ ನಮಗೆ
ಅಸಾಧ್ಯವಾಗಿ ಕಂಡುಬರಲಿಲ್ಲ. [37]ಆದರೆ ಅಮ್ಮೋನಿಯ
ರಿಗೆ ಸೇರಿದ ದೇಶದ ಸಮೀಪಕ್ಕೆ ನಾವು ಹೋಗಲಿಲ್ಲ;
ಯಬ್ಬೋಕ್ ನದಿಯ ಬದಿಗೂ ನಾವು ಹೋಗಲಿಲ್ಲ;
ಬೆಟ್ಟ ಪ್ರದೇಶಗಳ ಪಟ್ಟಣಗಳಿಗೂ ನಾವು ಹೋಗಲಿಲ್ಲ;
ನಮ್ಮ ದೇವರಾದ ಯೆಹೋವನು ನಮಗೆ ಕೊಡದೆ
ಇರುವ ದೇಶಗಳ ಬಳಿಗೆ ನಾವು ಹೋಗಲೇ ಇಲ್ಲ.

### ಬಾಷಾನಿನ ಜನರೊಂದಿಗೆ ಯುದ್ಧ

3 ‘‘ನಾವು ನಮ್ಮ ದಾರಿಯಿಂದ ಹಿಂತಿರುಗಿ ಬಾಷಾನಿಗೆ
ಹೋಗುವ ದಾರಿಯಲ್ಲಿ ಹೋದೆವು. ಎದ್ರೈಯಲ್ಲಿ
ಬಾಷಾನಿನ ಅರಸನಾದ ಓಗನೂ ಅವನ ಸೈನ್ಯವೂ
ನಮ್ಮೊಂದಿಗೆ ಯುದ್ಧಮಾಡಲು ಹೊರಟು ಬಂದವು.
[2]ಆಗ ಯೆಹೋವನು ನನಗೆ, ‘ಓಗನಿಗೆ ನೀನು ಭಯಪಡ
ಬೇಡ. ಅವನನ್ನೂ ಅವನ ಜನರನ್ನೂ ಅವನ ದೇಶವನ್ನೂ
ನಿನಗೊಪ್ಪಿಸುವೆನು. ಹೆಷ್ಬೋನಿನಲ್ಲಿ ಆಳುತ್ತಿದ್ದ ಅಮೋರಿ
ಯರ ರಾಜನಾದ ಸೀಹೋನನನ್ನು ಸೋಲಿಸಿದಂತೆಯೇ
ಇವನನ್ನು ಸೋಲಿಸುವೆ.’
[3]‘‘ಅದೇ ಪ್ರಕಾರ ನಾವು ಓಗನನ್ನು ಸೋಲಿಸುವಂತೆ
ದೇವರಾದ ಯೆಹೋವನು ಸಹಾಯ ಮಾಡಿದನು. ಅವ
ನನ್ನೂ ಅವನ ಸೈನದಲ್ಲಿ ಯಾರೂ ಉಳಿಯದಂತೆ ನಾಶ
ಮಾಡಿದೆವು. [4]ಆ ಸಮಯದಲ್ಲಿ ಓಗನಿಗೆ ಸೇರಿದ್ದ ಎಲ್ಲಾ
ಪಟ್ಟಣಗಳನ್ನು ಸ್ವಾಧೀನಮಾಡಿಕೊಂಡೆವು. ಬಾಷಾನಿನಲ್ಲಿ
ಓಗನ ರಾಜ್ಯದಲ್ಲಿರುವ ಆರ್ಗೋಬ್ ಪ್ರದೇಶದಲ್ಲಿ ಅರ
ವತ್ತು ಪಟ್ಟಣಗಳು ನಮ್ಮ ವಶವಾದವು. [5]ಆ ಪಟ್ಟಣಗಳೆಲ್ಲಾ
ಬಹಳ ಪ್ರಬಲವಾಗಿದ್ದವು. ಅವುಗಳಿಗೆ ಎತ್ತರವಾದ ಪೌಳಿ
ಗೋಡೆಗಳಿದ್ದು ಕದಗಳಿಂದಲೂ ಅಗುಳಿಗಳಿಂದಲೂ
ಭದ್ರಮಾಡಲ್ಪಟ್ಟಿದ್ದವು. ಇನ್ನೂ ಅನೇಕ ಪಟ್ಟಣಗಳಿಗೆ
ಕೋಟೆಗಳಿರಲಿಲ್ಲ. [6]ಹೆಷ್ಬೋನಿನ ಅರಸನಾದ
ಸೀಹೋನನಿಗೆ ಸೇರಿದ ಪಟ್ಟಣಗಳನ್ನು ನಾವು ಹೇಗೆ ಧ್ವಂಸ
ಮಾಡಿದೆವೋ ಹಾಗೆಯೇ ಈ ಪಟ್ಟಣಗಳನ್ನು ಧ್ವಂಸ
ಮಾಡಿ ಸ್ತ್ರೀಯರೂ ಕೂಸುಗಳೂ ಸೇರಿದಂತೆ ಅದರ
ನಿವಾಸಿಗಳಲ್ಲಿ ಒಬ್ಬರನ್ನೂ ಬಿಡದೆ ಹತಿಸಿಬಿಟ್ಟೆವು. [7]ಆದರೆ
ಅವರ ಪಶುಗಳನ್ನೂ ಬೆಲೆಬಾಳುವ ವಸ್ತುಗಳನ್ನೂ ನಾವು
ಇಟ್ಟುಕೊಂಡೆವು.
[8]‘‘ಈ ರೀತಿಯಾಗಿ ನಾವು ಇಬ್ಬರು ಅಮೋರಿಯ
ಅರಸರ ದೇಶಗಳನ್ನು ಸ್ವಾಧೀನ ಮಾಡಿಕೊಂಡೆವು. ಅವರ
ದೇಶಗಳು ಜೋರ್ಡನ್ ನದಿಯ ಪೂರ್ವದಲ್ಲಿದ್ದು
ಅರ್ನೋನ್ ಕಣಿವೆಯಿಂದ ಹಿಡಿದು, ಹೆರ್ಮೋನ್
ಪರ್ವತದ ತನಕ ವಿಸ್ತಾರವಾಗಿತ್ತು. [9](ಚೀದೋನಿನ
ಜನರು ಹೆರ್ಮೋನ್ ಪರ್ವತವನ್ನು ಸಿರ್ಯೋನ್ ಎಂದು
ಕರೆಯುವರು. ಆದರೆ ಅಮೋರಿಯರು ಅದನ್ನು ಸೆನೀರ್
ಎಂದು ಕರೆಯುತ್ತಾರೆ.) [10]ಗಿಲ್ಯಾದ್ ಪ್ರಾಂತ್ಯ ಮತ್ತು
ಎತ್ತರವಾದ ಬಯಲಿನಲ್ಲಿದ್ದ ಪಟ್ಟಣಗಳನ್ನೆಲ್ಲಾ ನಾವು
ಸ್ವಾಧೀನ ಮಾಡಿಕೊಂಡೆವು. ಸಲ್ಕಾ ಮತ್ತು ಎದ್ರೈ
ಪಟ್ಟಣಗಳ ತನಕವಿರುವ ಬಾಷಾನ್ ದೇಶವನ್ನೆಲ್ಲಾ ನಾವು
ಸ್ವಾಧೀನ ಮಾಡಿಕೊಂಡಿದ್ದೆವು.’’
[11](ಓಗನು ಬಾಷಾನಿನ ರಾಜನಾಗಿದ್ದನು.) ಎದ್ರೈ
ಮತ್ತು ಸಲ್ಕಾ ಬಾಷಾನಿನಲ್ಲಿದ್ದ ಓಗನ ರಾಜ್ಯದ ಪಟ್ಟಣ
ಗಳಾಗಿದ್ದವು. ಅವನು ರೆಫಾಯರಲ್ಲಿ ಅಳಿದುಳಿದವರಲ್ಲಿ
ಒಬ್ಬನಾಗಿದ್ದನು. ಅವನ ಮಂಚವು ಕಬ್ಬಿಣದಿಂದ ಮಾಡ
ಲ್ಪಟ್ಟಿತ್ತು. ಅದು ಹದಿಮೂರು ಅಡಿ ಉದ್ದವಿತ್ತು. ಆರು
ಅಡಿ ಅಗಲವಿತ್ತು. ಆ ಮಂಚವು ಈಗಲೂ ಅಮ್ಮೋನಿ
ಯರು ವಾಸಿಸುವ ರಬ್ಬಾದಲ್ಲಿದೆ.

### ಜೋರ್ಡನ್ ನದಿಯ ಪೂರ್ವಕ್ಕೆ ಇರುವ ದೇಶ

[12]‘‘ನಾವು ಗೆದ್ದುಕೊಂಡಿದ್ದ ಆ ದೇಶಗಳನ್ನು ನಮ್ಮದಾಗಿ
ಮಾಡಿಕೊಂಡೆವು. ಇದರ ಒಂದು ಭಾಗವನ್ನು ನಾನು
ರೂಬೇನ್ ಮತ್ತು ಗಾದ್ ಕುಲದವರಿಗೆ ಹಂಚಿ
ಕೊಟ್ಟೆನು. ಅದು ಅರೋಯೇರ್‌ನಿಂದ ಹಿಡಿದು
ಗಿಲ್ಯಾದ್ ಪ್ರದೇಶದ ತನಕವಿತ್ತು. ಅಂದರೆ ಅರ್ನೋನ್
ಕಣಿವೆಯಲ್ಲಿರುವ ಅರೋಯೇರ್‌ನಿಂದ ಮೊದಲು
ಗೊಂಡು ಗಿಲ್ಯಾದ್ ಬೆಟ್ಟಪ್ರದೇಶದವರೆಗೂ ಅದರ
ಎಲ್ಲಾ ಪಟ್ಟಣಗಳ ಸಮೇತವಾಗಿ ನಾನು ಕೊಟ್ಟೆನು. ಬೆಟ್ಟ

ಪ್ರದೇಶವಾದ ಗಿಲ್ಯಾದಿನಲ್ಲಿ ಅರ್ಧಭಾಗ ಅವರಿಗೆ ದೊರೆ
ಯಿತು. 13ಗಿಲ್ಯಾದಿನ ಇನ್ನೊಂದು ಅರ್ಧಪ್ರದೇಶ ಮತ್ತು
ಇಡೀ ಬಾಷಾನ್ ದೇಶವನ್ನು ಮನಸ್ಸೆಯ ಅರ್ಧಕುಲ
ದವರಿಗೆ ಹಂಚಿದೆನು.'' (ಬಾಷಾನ್ ಓಗನ ಸಾಮ್ರಾಜ್ಯ
ವಾಗಿತ್ತು. ಬಾಷಾನಿನ ಒಂದು ಭಾಗವನ್ನು ಆರ್ಗೋಬ್
ಎಂದು ಕರೆಯುತ್ತಾರೆ. ಅಲ್ಲದೆ ರೆಫಾಯರ ದೇಶ
ವೆಂತಲೂ ಕರೆಯುತ್ತಾರೆ. 14ಮನಸ್ಸೆ ಕುಲದ ಯಾಯಿ
ರನು ಎಂಬಾತನು ಆರ್ಗೋಬ್ ಪ್ರದೇಶಗಳನ್ನು ವಶ
ಪಡಿಸಿಕೊಂಡನು. ಆ ಪ್ರದೇಶ ಗೆಷೂರ್ಯರ ಮತ್ತು
ಮಾಕಾತ್ಯರ ದೇಶದ ಮೇರೆಯ ತನಕ ಹಬ್ಬಿತ್ತು. ಆದುದ
ರಿಂದ ಆ ಪ್ರದೇಶಕ್ಕೆ ಯಾಯೀರ್ ಎಂಬ ಹೆಸರು ಬಂತು.
ಇಂದಿಗೂ ಜನರು ಆ ಊರುಗಳಿಗೆ, ''ಯಾಯೀರನ
ಬಾಷಾನ್ ಊರುಗಳು'' ಎಂದು ಕರೆಯುತ್ತಾರೆ.)

15''ಗಿಲ್ಯಾದ್ ಪ್ರಾಂತ್ಯವನ್ನು ನಾನು ಮಾಕೀರನಿಗೆ
ಕೊಟ್ಟೆನು. 16ರೂಬೇನ್ ಮತ್ತು ಗಾದ್ ಕುಲಗಳವರಿಗೆ
ಗಿಲ್ಯಾದಿನಿಂದ ಪ್ರಾರಂಭವಾಗುವ ಪ್ರಾಂತ್ಯವನ್ನು
ಕೊಟ್ಟೆನು. ಇದು ಅರ್ನೋನ್ ಕಣಿವೆಯಿಂದಿಡಿದು
ಯಬ್ಬೋಕ್ ಹೊಳೆಯ ತನಕ ವಿಸ್ತಾರವಾಗಿದೆ.
ಯಬ್ಬೋಕ್ ಹೊಳೆಯು ಅಮ್ಮೋನಿಯರ ಮೇರೆ
ಯಾಗಿದೆ. 17ಅವರ ಪಶ್ಚಿಮದ ಮೇರೆ ಜೋರ್ಡನ್
ಹೊಳೆಯಾಗಿದೆ; ಉತ್ತರದ ಮೇರೆ ಗಲಿಲಾಯ ಸಮುದ್ರ
ವಾಗಿದೆ; ದಕ್ಷಿಣದ ಮೇರೆ ಮೃತ್ಯು ಸಮುದ್ರವಾಗಿದೆ. ಅದು
ಪಿಸ್ಗಾ ಬೆಟ್ಟದ ಬುಡದಲ್ಲಿದೆ.

18''ಆ ಕಾಲದಲ್ಲಿ ನಾನು ನಿಮಗೆ ಆಜ್ಞಾಪಿಸಿದ್ದೇ
ನೆಂದರೆ: 'ನಿಮ್ಮ ದೇವರಾದ ಯೆಹೋವನು ನಿಮಗೆ
ಜೋರ್ಡನ್ ನದಿಯ ಪೂರ್ವದಿಕ್ಕಿನಲ್ಲಿ ಸ್ವಾಸ್ಥ್ಯವನ್ನು
ಕೊಟ್ಟಿದ್ದಾನೆ. ಆದರೆ ನಿಮ್ಮಲ್ಲಿರುವ ಸೈನಿಕರು ತಮ್ಮ
ಆಯುಧಗಳನ್ನು ತೆಗೆದುಕೊಂಡು ಇತರ ಇಸ್ರೇಲ
ರೊಂದಿಗೆ ನದಿಯಾಚೆಗೆ ಬರಬೇಕು. ಅಲ್ಲಿಯ ದೇಶ
ಗಳನ್ನು ಸ್ವಾಧೀನಪಡಿಸಿಕೊಂಡು ಶಾಂತಿನೆಲೆಸುವ ತನಕ
ಅವರೊಂದಿಗಿರಬೇಕು. 19ನಾನು ನಿಮಗೆ ಕೊಟ್ಟಿರುವ
ಪಟ್ಟಣಗಳಲ್ಲಿ ನಿಮ್ಮ ಹೆಂಡತಿಯರೂ ಮಕ್ಕಳೂ ಪಶು
ಗಳೂ ವಾಸಿಸಬೇಕು; (ನಿಮಗೆ ಪಶುಗಳು ಹೆಚ್ಚಾಗಿವೆ
ಎಂದು ನನಗೆ ಗೊತ್ತುಂಟು.) 20ಜೋರ್ಡನ್ ನದಿಯ
ಮತ್ತೊಂದು ಕಡೆಯಲ್ಲಿರುವ ದೇಶವನ್ನು ಯೆಹೋವನು
ನಿಮ್ಮ ಸಂಬಂಧಿಕರಾದ ಇಸ್ರೇಲರಿಗೆ ಕೊಡಲಿದ್ದಾನೆ. ಆ
ದೇಶವನ್ನು ಇಸ್ರೇಲರು ತೆಗೆದುಕೊಳ್ಳುವ ತನಕ ನೀವು ಅವ
ರಿಗೆ ಸಹಾಯ ಮಾಡಲೇಬೇಕು. ಇಲ್ಲಿ ಯೆಹೋವನು
ನಿಮಗೆ ಶಾಂತಿಯನ್ನು ದಯಪಾಲಿಸಿದಂತೆ ಅಲ್ಲಿಯೂ
ದಯಪಾಲಿಸುವ ತನಕ ಅವರಿಗೆ ಸಹಾಯ ಮಾಡಿರಿ.
ಬಳಿಕ ನಾನು ನಿಮಗೆ ಕೊಟ್ಟಿರುವ ಈ ದೇಶಕ್ಕೆ ನೀವು
ಮರಳಿ ಬರಬಹುದು.'

21''ಆಗ ನಾನು ಯೆಹೋಶುವನಿಗೆ, ' ಈ ಇಬ್ಬರು
ಅರಸರಿಗೆ ನಾನು ಮಾಡಿದ್ದನ್ನು ಕಣ್ಣಾರೆ ನೋಡಿರುವೆ.
ಅದೇ ಪ್ರಕಾರ ನೀವು ಈಗ ಪ್ರವೇಶಿಸುವ ದೇಶಗಳಿಗೂ
ಮಾಡುವೆನು. 22ಆ ಪ್ರಾಂತ್ಯದ ಅರಸುಗಳಿಗೆ ನೀನು ಹೆದರ
ಬೇಡ. ನಿನ್ನ ದೇವರಾದ ಯೆಹೋವನು ನಿನಗಾಗಿ ಯುದ್ಧ
ಮಾಡುವನು' ಎಂದು ಹೇಳಿದೆನು.

### ಕಾನಾನ್ ದೇಶದೊಳಗೆ ಮೋಶೆಗೆ ಪ್ರವೇಶವಿಲ್ಲ

23''ನಾನು ನನ್ನ ಮನವಿಯನ್ನು ನೆರವೇರಿಸಲು
ಯೆಹೋವನನ್ನು ಬೇಡಿಕೊಂಡೆನು. 24ನಾನು
'ಯೆಹೋವನೇ, ನನ್ನ ಒಡೆಯನೇ, ನಾನು ನಿನ್ನ ಸೇವಕ.
ನಿನ್ನ ತ್ರಾಣವುಳ್ಳ ಹಸ್ತದಿಂದ ಮಾಡಿದ ಪರಾಕ್ರಮದ
ಕಾರ್ಯಗಳನ್ನು ನೀನು ನನಗೆ ಸ್ವಲ್ಪಮಟ್ಟಿಗೆ ತೋರಿಸಿ
ರುವೆ. ನೀನು ಮಾಡಿದ ಮಹಾಕೃತ್ಯಗಳನ್ನು ಮಾಡಲು ಪರ
ಲೋಕದ ಅಥವಾ ಭೂಲೋಕದ ಯಾವ ದೇವರು
ಗಳಿಗೂ ಸಾಧ್ಯವಿಲ್ಲ. 25ನಾನು ಜೋರ್ಡನ್ ನದಿದಾಟಿ,
ನೀನು ನಮಗೆ ಕೊಡುವ ಉತ್ತಮವಾದ ದೇಶವನ್ನು
ನಾನು ನೋಡುವಂತೆ ಮಾಡು. ಅದರ ಮನೋಹರವಾದ
ಬೆಟ್ಟಪ್ರದೇಶಗಳನ್ನೂ ಲೆಬನೋನ್ ಪ್ರಾಂತ್ಯಗಳನ್ನೂ
ನೋಡುವಂತೆ ಮಾಡು'' ಎಂದು ಬೇಡಿದೆನು.

26''ಆದರೆ ನಿಮ್ಮ ಕಾರಣದಿಂದ ಯೆಹೋವನು ನನ್ನ
ಮೇಲೆ ಕೋಪಗೊಂಡಿದ್ದನು. ಆತನು ನನಗೆ ಕಿವಿಗೊಡ
ಲಿಲ್ಲ. ಆತನು ನನಗೆ ಹೇಳಿದ್ದೇನೆಂದರೆ: 'ಅಷ್ಟೇ ಸಾಕು!
ಇನ್ನು ಈ ವಿಷಯವನ್ನು ನೀನು ಎತ್ತಬಾರದು. 27ನೀನು
ಪಿಸ್ಗಾ ಬೆಟ್ಟವನ್ನು ಹತ್ತಿ ಉತ್ತರ, ಪಶ್ಚಿಮ, ಪೂರ್ವ ದಕ್ಷಿಣ
ದಿಕ್ಕುಗಳ ಕಡೆಗೆ ನೋಡು ಮತ್ತು ಆನಂದಿಸು. ಆದರೆ
ನೀನು ಜೋರ್ಡನ್ ನದಿ ದಾಟಿ ಆ ಪ್ರದೇಶಗಳನ್ನು
ಪ್ರವೇಶಿಸುವುದಿಲ್ಲ. 28ನೀನು ಯೆಹೋಶುವನನ್ನು
ಪ್ರೋತ್ಸಾಹಿಸು. ಅವನಿಗೆ ವಿಷಯಗಳನ್ನೆಲ್ಲಾ ತಿಳಿಯ
ಪಡಿಸು. ಅವನು ಜನರನ್ನು ಜೋರ್ಡನ್ ನದಿಯಾಚೆ
ನಡೆಸಬೇಕು. ಆ ದೇಶವನ್ನು ಸ್ವಾಧೀನ ಮಾಡಿಕೊಳ್ಳಲು
ಅವನು ಅವರಿಗೆ ಸಹಾಯಮಾಡುವನು. ಆದುದರಿಂದ
ಅವನನ್ನು ಬಲಪಡಿಸು' ಎಂದು ಹೇಳಿದನು.

29''ಅಂತೆಯೇ ನಾವು ಬೇತ್‌ಪೆಗೋರಿನ ಎದುರಿ
ಗಿರುವ ಕಣಿವೆಯಲ್ಲಿ ಇಳಿದುಕೊಂಡೆವು.''

### ದೇವರ ಕಟ್ಟಳೆಗಳಿಗೆ ವಿಧೇಯರಾಗಬೇಕೆಂದು ಮೋಶೆಯು ಹೇಳಿದ್ದು

4 ''ಇಸ್ರೇಲರೇ, ಈಗ ನಾನು ಉಪದೇಶಿಸಲಿರುವ
ಕಟ್ಟಳೆಗಳಿಗೂ ಆಜ್ಞೆಗಳಿಗೂ ಕಿವಿಗೊಡಿರಿ. ನೀವು
ಅವುಗಳಿಗೆ ವಿಧೇಯರಾದರೆ ಜೀವಿಸುವಿರಿ. ಆಗ ನೀವು
ನಿಮ್ಮ ಪೂರ್ವಿಕರ ದೇವರಾದ ಯೆಹೋವನು ನಿಮಗೆ
ಕೊಡಲಿರುವ ದೇಶವನ್ನು ಸ್ವಾಧೀನ ಮಾಡಿಕೊಳ್ಳುವಿರಿ.

[2]ನಾನು ಕೊಡುವ ಆಜ್ಞೆಗಳಿಗೆ ನೀವು ಏನನ್ನೂ ಸೇರಿಸ
ಬಾರದು; ಏನನ್ನೂ ತೆಗೆಯಬಾರದು. ನಾನು ನಿಮಗೆ
ತಿಳಿಸುವ ದೇವರ ಆಜ್ಞೆಗಳಿಗೆ ನೀವು ವಿಧೇಯರಾಗ
ಬೇಕು.
[3]“ಬಾಳ್‌ಪೆಗೋರಿನಲ್ಲಿ ನಡೆದ ಸಂಗತಿಯನ್ನು ನೀವು
ನೋಡಿದ್ದೀರಿ. ಅಲ್ಲಿ ಬಾಳನನ್ನು ಪೂಜಿಸಿದವರನ್ನೆಲ್ಲಾ
ಯೆಹೋವನು ನಾಶಮಾಡಿದನು. [4]ಆದರೆ ಯಾರು ದೇವ
ರಾದ ಯೆಹೋವನನ್ನು ಮಾತ್ರ ಸೇವಿಸಿದರೋ ಅವರು
ಈಗಲೂ ಜೀವಂತರಾಗಿದ್ದಾರೆ.
[5]“ಯೆಹೋವನು ನನಗೆ ಆಜ್ಞಾಪಿಸಿದ ವಿಧಿನಿಯಮ
ಗಳನ್ನು ನಾನು ನಿಮಗೆ ಬೋಧಿಸಿದೆನು. ಈಗ ನೀವು
ಸ್ವಾಧೀನ ಪಡಿಸಿಕೊಳ್ಳುವ ದೇಶದಲ್ಲಿ ನೀವು ನೆಲೆಸುವಾಗ
ಆ ವಿಧಿನಿಯಮಗಳನ್ನು ಅನುಸರಿಸಬೇಕೆಂದು ನಾನು
ನಿಮಗೆ ಬೋಧಿಸಿದೆನು. [6]ಆ ನಿಯಮಗಳನ್ನು ಪರಿ
ಪೂರ್ಣವಾಗಿ ಅಭ್ಯಾಸಿಸಿರಿ, ‘ಆಗ ಅನ್ಯಜನರು ನಿಮ್ಮನ್ನು
ನೋಡಿ ನೀವು ಜ್ಞಾನಿಗಳು ಎಂದು ತಿಳಿದುಕೊಳ್ಳುವರು.
ಆ ದೇಶದ ಜನರು ನಿಮ್ಮ ವಿಧಿನಿಯಮಗಳನ್ನು ಕೇಳಿ
ತಿಳಿದು ನೀವು ನಿಜವಾಗಿಯೂ ಬುದ್ಧಿಯುಳ್ಳವರಾದ
ಜ್ಞಾನಿಗಳು ಎಂದು ತಿಳಿದು ಕೊಳ್ಳುವರು.’
[7]“ನಾವು ನಮ್ಮ ದೇವರಾದ ಯೆಹೋವನಿಗೆ
ಪ್ರಾರ್ಥಿಸುವಾಗ ಆತನು ನಮ್ಮ ಹತ್ತಿರವೇ ಇದ್ದಾನೆ.
ಯಾವ ದೇಶದವರಿಗೂ ಆತನಂಥ ದೇವರಿಲ್ಲ. [8]ನಾನು
ನಿಮಗೆ ಈ ಹೊತ್ತು ಕೊಡುವ ಉಪದೇಶಗಳಿಗೆ ನ್ಯಾಯ
ದಲ್ಲೂ ಒಳ್ಳೆಯದರಲ್ಲೂ ಸರಿಸಮಾನವಾದ ಕಟ್ಟಳೆಗಳನ್ನು
ಮತ್ತು ನಿಯಮಗಳನ್ನು ಬೇರೆ ಯಾವ ದೊಡ್ಡ ದೇಶವೂ
ಹೊಂದಿಲ್ಲ! [9]ಆದರೆ ನೀವು ನೋಡಿದ್ದನ್ನು ನಿಮ್ಮ ಜೀವ
ಮಾನವೆಲ್ಲಾ ಜಾಗ್ರತೆಯಿಂದಿದ್ದು ಮರೆಯದೆ ಅದನ್ನು
ನಿಮ್ಮ ಮಕ್ಕಳಿಗೂ ಮೊಮ್ಮಕ್ಕಳಿಗೂ ತಿಳಿಸಬೇಕು.
[10]ಸೀನಾಯಿ ಬೆಟ್ಟದ ಬಳಿಯಲ್ಲಿ ನೀನು ಯೆಹೋವನ
ಸನ್ನಿಧಾನದಲ್ಲಿ ನಿಂತಿದ್ದನ್ನು ನೀವು ಜ್ಞಾಪಕ ಮಾಡಿ
ಕೊಳ್ಳಿರಿ. ಆತನು ನನಗೆ ಹೇಳಿದ್ದೇನೆಂದರೆ: ‘ನಾನು
ಹೇಳುವ ಮಾತುಗಳನ್ನು ಕೇಳುವಂತೆ ಜನರನ್ನೆಲ್ಲಾ ಒಟ್ಟು
ಗೂಡಿಸು. ನನ್ನ ಮಾತುಗಳನ್ನು ಕೇಳಿ ಅವರು ಜೀವ
ಮಾನವೆಲ್ಲಾ ನನ್ನನ್ನು ಸನ್ಮಾನಿಸಲು ಕಲಿತುಕೊಳ್ಳುವರು
ಮತ್ತು ಅವರ ಮಕ್ಕಳಿಗೂ ಕಲಿಸುವರು.’ [11]ಆಗ ನೀವು
ಬೆಟ್ಟದ ಸಮೀಪಕ್ಕೆ ಬಂದು ನಿಂತುಕೊಂಡಿರಿ. ಆ
ಪರ್ವತವು ಬೆಂಕಿಯಿಂದ ಪ್ರಜ್ವಲಿಸಿ ಆಕಾಶದ ತನಕ
ಮುಟ್ಟಿತ್ತು. ಆಗ ಕಾರ್ಮೋಡವು ಕತ್ತಲೆಯೂ ಆವರಿಸಿತು.
[12]ಆ ಬೆಂಕಿಯೊಳಗಿಂದ ಯೆಹೋವನು ಮಾತನಾಡಿ
ದನು. ಅದು ಯಾರೋ ಮಾತಾಡಿದಂತಿತ್ತು. ಆದರೆ ನೀವು
ಯಾರನ್ನು ಕಾಣಲಿಲ್ಲ. ಸ್ವರವನ್ನು ಮಾತ್ರ ಕೇಳಿದಿರಿ.
[13]ಅಲ್ಲಿ ಆತನು ನಿಮ್ಮೊಂದಿಗೆ ಒಡಂಬಡಿಕೆ ಮಾಡಿ
ಕೊಂಡನು. ಆತನು ಹತ್ತು ಆಜ್ಞೆಗಳನ್ನು ಹೇಳಿ ಅದನ್ನು
ಅನುಸರಿಸಲು ಆಜ್ಞಾಪಿಸಿದನು. ಆ ಹತ್ತು ಆಜ್ಞೆಗಳನ್ನು
ಎರಡು ಕಲ್ಲಿನ ಹಲಗೆಗಳ ಮೇಲೆ ಬರೆದನು. [14]ಅದೇ
ಸಮಯದಲ್ಲಿ ದೇವರಾದ ಯೆಹೋವನು ನನಗೆ ಇತರ
ವಿಧಿನಿಯಮಗಳನ್ನು ತಿಳಿಸಿ ನೀವು ವಾಗ್ದಾನ ಮಾಡಿದ
ದೇಶದೊಳಗೆ ನೆಲೆಸಿದಾಗ ಆ ವಿಧಿನಿಯಮಗಳನ್ನು
ಅನುಸರಿಸಲು ನಿಮಗೆ ತಿಳಿಸಲು ಹೇಳಿದನು.
[15]“ಆ ದಿನ ಸೀನಾಯಿ ಬೆಟ್ಟದಲ್ಲಿ ಸ್ವರವನ್ನು ಮಾತ್ರ
ಕೇಳಿದಿರಿ. ನೀವು ಯೆಹೋವನ ರೂಪವನ್ನು ನೋಡ
ಲಿಲ್ಲ. ದೇವರಿಗೆ ಯಾವ ಆಕಾರವೂ ಇಲ್ಲ. [16]ಆದುದ
ರಿಂದ ಜಾಗ್ರತೆಯಿಂದಿರಬೇಕು. ನೀವು ಪಾಪಮಾಡಿ
ನಿಮ್ಮನ್ನು ನಾಶಪಡಿಸಿಕೊಳ್ಳಬೇಡಿ. ಮನುಷ್ಯನ ರೂಪವ
ನ್ನಾಗಲೀ [17]ಆಕಾಶದಲ್ಲಿ ಹಾರಾಡುವ ಪಕ್ಷಿಯ ರೂಪವ
ನ್ನಾಗಲೀ ಭೂಮಿಯ ಮೇಲೆ ಸಂಚರಿಸುವ ಪ್ರಾಣಿಯ
ರೂಪವನ್ನಾಗಲೀ [18]ನೆಲದ ಮೇಲೆ ಹರಿದಾಡುವ ಕ್ರಿಮಿ
ಕೀಟಗಳ ರೂಪವನ್ನಾಗಲೀ ನೀರಿನಲ್ಲಿ ಈಜಾಡುವ
ಮೀನುಗಳ ರೂಪವನ್ನಾಗಲೀ ಮಾಡಿಕೊಳ್ಳಬೇಡಿ.
[19]ನೀವು ಆಕಾಶವನ್ನು ತಲೆಯೆತ್ತಿ ನೋಡುವಾಗ ಅಲ್ಲಿ
ಕಾಣುವ ಸೂರ್ಯ ಚಂದ್ರ ನಕ್ಷತ್ರಾದಿಗಳನ್ನು ಪೂಜಿಸ
ಬೇಡಿ. ಇವುಗಳನ್ನೆಲ್ಲಾ ಅನ್ಯರು ಪೂಜಿಸುವರು. [20]ಆದರೆ
ಯೆಹೋವನು ನಿಮ್ಮನ್ನು ಈಜಿಪ್ಟ್ ದೇಶದಿಂದ ಹೊರ
ತಂದು ತನ್ನ ಸ್ವಕೀಯ ಪ್ರಜೆಯನ್ನಾಗಿ ಮಾಡಿಕೊಂಡಿರು
ತ್ತಾನೆ. ಕಬ್ಬಿಣವನ್ನು ಕರಗಿಸುವ ಬೆಂಕಿಯ ಕುಲುಮೆ
ಯಂತಿದ್ದ ಈಜಿಪ್ಟಿನಿಂದ ನಿಮ್ಮನ್ನು ಎಳೆದುತಂದು ತನ್ನ
ವಿಶೇಷ ಜನಾಂಗವಾಗಿ ನಿಮ್ಮನ್ನು ತೆಗೆದುಕೊಂಡಿರು
ತ್ತಾನೆ. ಈಗ ನೀವು ಆತನ ಜನರಾಗಿದ್ದೀರಿ.
[21]“ನಿಮ್ಮ ದೆಸೆಯಿಂದ ಯೆಹೋವನು ನನ್ನ ಮೇಲೆ
ಸಿಟ್ಟುಗೊಂಡನು. ಆ ಕಾರಣದಿಂದ ಕಾನಾನ್ ದೇಶವನ್ನು
ನಾನು ಪ್ರವೇಶಿಸಬಾರದು ಎಂದು ನನಗೆ ಹೇಳಿರುತ್ತಾನೆ.
ಜೋರ್ಡನ್ ನದಿಯಾಚೆ ನಿಮಗೆ ಕೊಡುವ ಆ ಉತ್ತಮ
ದೇಶವನ್ನು ನಾನು ನೋಡಬಾರದೆಂದು ಪ್ರಮಾಣ ಮಾಡಿ
ದ್ದಾನೆ. [22]ಆದುದರಿಂದ ನಾನು ಇದೇ ದೇಶದಲ್ಲಿ ಸಾಯು
ವೆನು. ಆದರೆ ನೀವು ಬೇಗನೆ ಜೋರ್ಡನ್ ನದಿಯನ್ನು
ದಾಟಿ ಆ ಒಳ್ಳೆಯ ದೇಶವನ್ನು ವಶಪಡಿಸಿಕೊಂಡು ಅಲ್ಲಿ
ವಾಸಿಸುವಿರಿ. [23]ನೀವು ಆ ದೇಶದಲ್ಲಿ ವಾಸಿಸುವಾಗ ನಿಮ್ಮ
ದೇವರಾದ ಯೆಹೋವನೊಡನೆ ನೀವು ಮಾಡಿರುವ
ಒಡಂಬಡಿಕೆಯನ್ನು ಮರೆಯಬೇಡಿರಿ. ನೀವು ಆತನ
ಕಟ್ಟಳೆಗಳಿಗೆ ವಿಧೇಯರಾಗಿರಿ. ಯಾವ ವಿಗ್ರಹಗಳ
ನ್ನಾಗಲೀ ಮಾಡಿಕೊಳ್ಳಬೇಡಿರಿ. [24]ನೀವು ಇತರ ದೇವರು
ಗಳನ್ನು ಪೂಜಿಸುವುದನ್ನು ಜೀವಸ್ವರೂಪನಾದ
ಯೆಹೋವನು ದ್ವೇಷಿಸುವುದರಿಂದ ಬೆಂಕಿಯಂತೆ ಆತನು
ನಿಮ್ಮನ್ನು ದಹಿಸಿಬಿಡುವನು.

[25]‘‘ನೀವು ಹೋಗುವ ದೇಶದಲ್ಲಿ ಬಹಳ ವರ್ಷ ಬಾಳಿದ
ನಂತರ ನಿಮಗೆ ಮಕ್ಕಳೂ ಮೊಮ್ಮಕ್ಕಳೂ ಆಗುವರು.
ಬಳಿಕ ನೀವು ನಿಮ್ಮ ಜೀವಿತಗಳನ್ನು ಹಾಳುಮಾಡಿ
ಕೊಳ್ಳುವಿರಿ. ನೀವು ಎಲ್ಲ ಬಗೆಯ ವಿಗ್ರಹಗಳನ್ನು ಮಾಡಿ
ಕೊಳ್ಳುವಿರಿ. ಅದು ದೇವರಿಗೆ ಬಹಳ ಕೋಪವನ್ನು
ಉಂಟುಮಾಡುವುದು! [26]ಆದುದರಿಂದ ನಾನು ನಿಮಗೆ
ಎಚ್ಚರಿಕೆ ಕೊಡುತ್ತಿದ್ದೇನೆ. ಆಕಾಶವೂ ಭೂಮಿಯೂ
ಇದಕ್ಕೆ ಸಾಕ್ಷಿ. ಆ ಕೆಟ್ಟ ಕೆಲಸವನ್ನು ನೀವು ಮಾಡಿದರೆ ನೀವು
ಹಾಳಾಗಿಹೋಗುವಿರಿ. ನೀವೀಗ ಜೋರ್ಡನ್ ನದಿ
ಯನ್ನು ದಾಟಿ ಆ ದೇಶವನ್ನು ಸ್ವಾಧೀನ ಮಾಡಿಕೊಳ್ಳಲು
ಹೋಗುತ್ತೀರಿ. ಆದರೆ ನೀವು ಮೂರ್ತಿಗಳನ್ನು ಮಾಡಿ
ಕೊಂಡರೆ ಅಲ್ಲಿ ಹೆಚ್ಚುಕಾಲ ಬಾಳುವುದಿಲ್ಲ. ನೀವು
ಸಂಪೂರ್ಣವಾಗಿ ನಾಶವಾಗುವಿರಿ. [27]ಯೆಹೋವನು
ನಿಮ್ಮನ್ನು ಅನ್ಯದೇಶಗಳಿಗೆ ಚದರಿಸಿಬಿಡುವನು. ಆತನು
ನಿಮ್ಮನ್ನು ಚದರಿಸಿಬಿಡುವ ದೇಶಗಳವರ ಮಧ್ಯದಲ್ಲಿ
ನಿಮ್ಮಲ್ಲಿ ಕೆಲವರು ಮಾತ್ರ ಜೀವಂತವಾಗಿ ಉಳಿದು
ಕೊಳ್ಳುವರು. [28]ಅಲ್ಲಿ ಮನುಷ್ಯರು ಕೈಯಿಂದ ಮಾಡಿದ
ದೇವರುಗಳನ್ನು ಪೂಜಿಸುವಿರಿ. ಅವು ಮರ ಕಲ್ಲುಗಳಿಂದ
ರೂಪಿಸಲ್ಪಟ್ಟಿವೆ. ಅವು ನೋಡಲಾರವು, ಕೇಳಲಾರವು,
ತಿನ್ನಲಾರವು ಮತ್ತು ಮೂಸಿನೋಡಲಾರವು! [29]ಆಗ
ನೀವು ನಿಮ್ಮ ದೇವರಾದ ಯೆಹೋವನನ್ನು ಹುಡುಕು
ವಿರಿ. ನೀವು ನಿಮ್ಮ ಹೃದಯ ಆತ್ಮಗಳಿಂದ ಹುಡುಕಿದಾಗ
ಆತನು ನಿಮಗೆ ಸಿಗುವನು. [30]ನೀವು ಕಷ್ಟದಲ್ಲಿ ಬಿದ್ದಾಗ ,
ಅವೆಲ್ಲಾ ನಿಮಗೆ ಸಂಭವಿಸಿದಾಗ ನೀವು ನಿಮ್ಮ ದೇವರಾದ
ಯೆಹೋವನ ಬಳಿಗೆ ಹಿಂದಿರುಗಿಬಂದು ಆತನಿಗೆ
ವಿಧೇಯರಾಗುವಿರಿ. [31]ನಿಮ್ಮ ದೇವರಾದ ಯೆಹೋವನು
ಕರುಣೆಯುಳ್ಳ ದೇವರಾಗಿದ್ದಾನೆ. ನಿಮ್ಮನ್ನು ಅಲ್ಲಿಯೇ
ಇರಗೊಡಿಸುವುದಿಲ್ಲ; ನಿಮ್ಮನ್ನು ಸಂಪೂರ್ಣವಾಗಿ ನಾಶ
ಪಡಿಸುವುದಿಲ್ಲ; ನಿಮ್ಮ ಪೂರ್ವಿಕರೊಂದಿಗೆ ಮಾಡಿದ
ಒಡಂಬಡಿಕೆಯನ್ನು ಆತನು ಮರೆತುಬಿಡುವವನಲ್ಲ.

### ದೇವರ ಅದ್ಭುತ ಕಾರ್ಯಗಳನ್ನು ಜ್ಞಾಪಕಕ್ಕೆ ತಂದುಕೊಳ್ಳಿರಿ

[32]‘‘ಇಂಥಾ ಅದ್ಭುತಕಾರ್ಯಗಳು ಹಿಂದೆ ಎಂದಾದರೂ
ನಡೆದಿವೆಯೋ? ದೇವರು ಭೂಮಿಯ ಮೇಲೆ ಮಾನವ
ನನ್ನು ನಿರ್ಮಿಸಿದ ಕಾಲದಿಂದಿಡಿದು ಇಂದಿನವರೆಗೂ
ಲೋಕದ ಎಲ್ಲಾ ಕಡೆಗಳಲ್ಲಿ ನಡೆದಿರುವ ಸಂಗತಿಗಳನ್ನು
ವೀಕ್ಷಿಸಿ ನೋಡಿರಿ. ಇದರಷ್ಟು ಮಹತ್ತಾದ ಯಾವುದ
ನ್ನಾದರೂ ಎಂದಾದರೂ ಕೇಳಿರುವುದುಂಟೆ?
[33]ಬೆಂಕಿಯ ಜ್ವಾಲೆಯೊಳಗಿಂದ ದೇವರು ಮಾತನಾ
ಡಿದ್ದನ್ನು ನೀವು ಕೇಳಿದರೂ ಬದುಕಿದ್ದೀರಿ. ಬೇರೆ ಜನರಿಗೆ
ಇಂಥಾ ಅನುಭವವಿದೆಯೋ? ಇಲ್ಲ. [34]ಬೇರೊಂದು
ಜನಾಂಗದೊಳಗಿಂದ ಜನರನ್ನು ತನಗೋಸ್ಕರ ತೆಗೆದು
ಕೊಳ್ಳಲು ಬೇರೆ ಯಾವ ದೇವರಾದರೂ ಎಂದಾದರೂ
ಪ್ರಯತ್ನಿಸಿದ್ದುಂಟೆ? ಇಲ್ಲ! ಆದರೆ ದೇವರಾದ
ಯೆಹೋವನು ಇಂಥ ಮಹಾಕಾರ್ಯಗಳನ್ನು ಮಾಡು
ವುದನ್ನು ನೀವು ನೋಡಿದ್ದೀರಿ! ಆತನು ನಿಮಗೆ ತನ್ನ
ಶಕ್ತಿಯನ್ನು, ಬಲವನ್ನು, ಅದ್ಭುತಕಾರ್ಯಗಳನ್ನು ಮತ್ತು
ಆಶ್ಚರ್ಯಕರವಾದ ಕಾರ್ಯಗಳನ್ನು ತೋರಿಸಿದ್ದಾನೆ.
ಆತನು ಈಜಿಪ್ಟಿನ ಮೇಲೆ ಬರಮಾಡಿದ ವಿಪತ್ತುಗಳನ್ನು
ಮತ್ತು ಭಯಂಕರವಾದ ಘಟನೆಗಳನ್ನು ನೀವು ನೋಡಿ
ದಿರಿ! [35]ಯೆಹೋವನು ನಿಮಗೆ ಇವುಗಳನ್ನು ತೋರಿಸಿ
ದ್ದಾನೆ, ಯಾಕಂದರೆ ಆತನೇ ದೇವರೆಂದೂ ಆತನಲ್ಲದೆ
ಬೇರೆ ಯಾವ ದೇವರೂ ಇಲ್ಲವೆಂದು ನೀವು ತಿಳಿದು
ಕೊಳ್ಳಬೇಕೆಂಬುದು ಆತನ ಉದ್ದೇಶವಾಗಿತ್ತು. [36]ಆಕಾಶ
ದಿಂದ ಆತನ ಮಾತುಗಳನ್ನು ನೀವು ಕೇಳುವಂತೆ ಮಾಡಿ
ದನು; ಭೂಮಿಯ ಮೇಲೆ ಒಂದು ದೊಡ್ಡ ಬೆಂಕಿಯನ್ನು
ನೋಡುವಂತೆ ಮಾಡಿದನು; ಮತ್ತು ಅದರೊಳಗಿಂದ
ನಿಮ್ಮೊಡನೆ ಮಾತನಾಡಿದನು. ನಿಮಗೆ ಪಾಠಗಳನ್ನು
ಕಲಿಸುವುದಕ್ಕಾಗಿ ಇವೆಲ್ಲವನ್ನು ಮಾಡಿದನು.

[37]‘‘ದೇವರಾದ ಯೆಹೋವನು ನಿಮ್ಮ ಪೂರ್ವಿಕರನ್ನು
ಪ್ರೀತಿಸಿದ್ದರಿಂದ ನಿಮ್ಮನ್ನು ಆರಿಸಿಕೊಂಡನು. ಆತನು ತನ್ನ
ಮಹಾಶಕ್ತಿಯಿಂದ ನಿಮ್ಮನ್ನು ಈಜಿಪ್ಟಿನಿಂದ ಹೊರ
ತಂದನು. [38]ನೀವು ಮುಂದುವರಿಯುತ್ತಿದ್ದಾಗ ನಿಮ
ಗಿಂತಲೂ ಮಹತ್ತಾದ ಮತ್ತು ಬಲಿಷ್ಠವಾಗಿದ್ದ ಜನಾಂಗಗ
ಳನ್ನು ಹೊರಡಿಸಿಬಿಟ್ಟನು. ಅವರ ದೇಶದೊಳಗೆ
ಯೆಹೋವನು ನಿಮ್ಮನ್ನು ನಡಿಸಿದನು. ಅಲ್ಲಿ ನೀವು ವಾಸಿ
ಸುವುದಕ್ಕಾಗಿ ಆ ದೇಶಗಳನ್ನು ನಿಮಗೆ ಕೊಟ್ಟನು.
ಈಗಲೂ ಆತನು ಹಾಗೆಯೇ ಮಾಡುತ್ತಿದ್ದಾನೆ.

[39]‘‘ಆದುದರಿಂದ ಈ ಹೊತ್ತು ನೀವೆಲ್ಲಾ ಯೆಹೋವ
ನನ್ನು ದೇವರೆಂದು ಸ್ವೀಕರಿಸಬೇಕು. ಆತನು ಮೇಲಿರುವ
ಆಕಾಶಕ್ಕೂ ಕೆಳಗಿರುವ ಭೂಮಿಗೂ ದೇವರಾಗಿದ್ದಾನೆ.
ಆತನ ಹೊರತು ಬೇರೆ ದೇವರುಗಳಿಲ್ಲ. [40]ನಾನು ಈ
ಹೊತ್ತು ಕೊಡಲಿರುವ ಆತನ ಕಟ್ಟಳೆಗಳನ್ನೂ ಆಜ್ಞೆ
ಗಳನ್ನೂ ನೀವು ಪರಿಪಾಲಿಸಬೇಕು. ಆಗ ನಿಮಗೂ ನಿಮ್ಮ
ನಂತರ ನಿಮ್ಮ ಮಕ್ಕಳಿಗೂ ಶುಭವಾಗುವುದು. ದೇವರಾದ
ಯೆಹೋವನು ನಿಮಗೆ ಕೊಡಲಿರುವ ದೇಶದಲ್ಲಿ
ಶಾಶ್ವತವಾಗಿ ಬಾಳುವಿರಿ!’’

### ಆಶ್ರಯನಗರಗಳನ್ನು ಮೋಶೆಯು ಆರಿಸಿದ್ದು

[41]ಆಮೇಲೆ ಮೋಶೆಯು ಜೋರ್ಡನ್ ನದಿಯ
ಪೂರ್ವಪ್ರಾಂತ್ಯದ ಮೂರು ನಗರಗಳನ್ನು ಆರಿಸಿದನು.
[42]ಯಾವನಾದರೂ ಒಬ್ಬ ಮನುಷ್ಯನನ್ನು ಉದ್ದೇಶವಿಲ್ಲದೆ
ಅಕಸ್ಮತ್ತಾಗಿ ಕೊಂದರೆ ಅವನು ಈ ಮೂರು ನಗರಗಳಲ್ಲಿ

ಯಾವುದಾದರೊಂದರಲ್ಲಿ ಆಶ್ರಯ ತೆಗೆದು ಕೊಂಡಲ್ಲಿ
ಅವನು ಮರಣದಂಡನೆಯಿಂದ ಪಾರಾಗುವನು. ಅಂದರೆ
ಅವನು ಕೊಲೆಯಾದವನನ್ನು ದ್ವೇಷಿಸದೆ ಇದ್ದಲ್ಲಿ ಮತ್ತು
ಅವನನ್ನು ಕೊಲ್ಲಬೇಕೆಂಬ ಉದ್ದೇಶವಿಲ್ಲದಿದ್ದಲ್ಲಿ. ಕೊಲೆ
ಗಾರನು ಆ ನಗರದಲ್ಲಿ ಸುರಕ್ಷಿತನಾಗಿರುವನು. 43ಆ
ಮೂರು ನಗರಗಳು ಯಾವುವೆಂದರೆ, ರೂಬೇನ್ ಕುಲ
ದವರಿಗೆ ಎತ್ತರವಾದ ಬಯಲು ಪ್ರದೇಶದಲ್ಲಿರುವ
ಬೆಚೆರ್; ಗಾದ್ ಕುಲದವರಿಗೆ ಗಿಲ್ಯಾದಿನಲ್ಲಿರುವ
ರಾಮೋತ್; ಮತ್ತು ಮನಸ್ಸೆ ಕುಲದವರಿಗೆ ಬಾಷಾನಿ
ನಲ್ಲಿರುವ ಗೋಲಾನ್.

## ಮೋಶೆಯ ಧರ್ಮಶಾಸ್ತ್ರದ ಪರಿಚಯ

44ಇಸ್ರೇಲ್ ಜನರಿಗೆ ಮೋಶೆಯು ದೇವರ ಕಟ್ಟಳೆ
ಗಳನ್ನು ಕೊಟ್ಟನು. 45ಈಜಿಪ್ಟಿನಿಂದ ಹೊರಬಂದ ಅವರಿಗೆ
ಈ ಉಪದೇಶಗಳನ್ನು, ಕಟ್ಟಳೆಗಳನ್ನು ಮತ್ತು ನಿಯಮ
ಗಳನ್ನು ಕೊಟ್ಟನು. 46ಜೋರ್ಡನ್ ನದಿಯ ಪೂರ್ವ
ಬಾಗದ ಬೇತ್‌ಪೆಗೋರಿನಲ್ಲಿ ಇಸ್ರೇಲ್ ಜನಸಮೂಹವು
ಸೇರಿಬಂದಿದ್ದಾಗ ಮೋಶೆಯು ಈ ನಿಯಮಗಳನ್ನು ಅವ
ರಿಗೆ ತಿಳಿಸಿದನು. ಆ ಸ್ಥಳವು ಹೆಷ್ಬೋನಿನಲ್ಲಿ ವಾಸವಾಗಿದ್ದ
ಅಮೋರಿಯನಾದ ಸೀಹೋನ್ ರಾಜನಿಗೆ ಸೇರಿತ್ತು
(ಮೋಶೆ ಮತ್ತು ಇಸ್ರೇಲರು ಈಜಿಪ್ಟಿನಿಂದ ಹೊರ
ಬಂದಾಗ ಸೀಹೋನನನ್ನು ಸೋಲಿಸಿದ್ದರು.
47ಸೀಹೋನನ ರಾಜ್ಯವನ್ನು ಅವರು ತಮ್ಮ ಉಪಯೋಗ
ಕ್ಕಾಗಿ ಸ್ವಾಧೀನ ಮಾಡಿಕೊಂಡರು, ಬಾಷಾನಿನ ರಾಜ
ನಾದ ಓಗನ ರಾಜ್ಯವನ್ನು ತಮ್ಮ ಸ್ವಾಧೀನಪಡಿಸಿ
ಕೊಂಡರು. ಅಮೋರಿಯರಾದ ಈ ಇಬ್ಬರು ರಾಜರು
ಗಳು ಜೋರ್ಡನ್ ನದಿಯ ಪೂರ್ವದಲ್ಲಿ ವಾಸವಾಗಿ
ದ್ದರು. 48ಈ ಪ್ರದೇಶವು ಅರ್ನೋನ್ ತಗ್ಗಿನಲ್ಲಿರುವ
ಅರೋಯೇರಿನಿಂದ ಹಿಡಿದು ಸೀಹೋನ್
(ಹೆರ್ಮೋನ್ ಪರ್ವತದ ತನಕ ವಿಸ್ತರಿಸಿಯದೆ. 49ಈ
ಪ್ರದೇಶವು ಜೋರ್ಡನ್ ತಗ್ಗು ಪ್ರಾಂತ್ಯವನ್ನು ಆವರಿಸಿದೆ.
ದಕ್ಷಿಣಕ್ಕೆ ಇದರ ಮೇರೆ ಉಪ್ಪುಸಮುದ್ರದ ತನಕವೂ
ಪೂರ್ವದಲ್ಲಿ ಪಿಸ್ಗಾ ಬೆಟ್ಟದ ತನಕವೂ ವಿಸ್ತರಿಸಿದೆ.

## ದಶಾಜ್ಞೆಗಳು

5 ಇಸ್ರೇಲ್ ಸಮೂಹದವರನ್ನೆಲ್ಲಾ ಮೋಶೆ ಒಟ್ಟಾಗಿ
ಸೇರಿಸಿ ಅವರಿಗೆ ಹೇಳಿದ್ದೇನೆಂದರೆ, ''ಇಸ್ರೇಲ್
ಜನರೇ, ನಾನು ಈ ಹೊತ್ತು ಹೇಳುವ ಕಟ್ಟಳೆಗಳಿಗೆ ಕಿವಿ
ಕೊಡಿರಿ. ಇವುಗಳನ್ನು ಕಲಿತುಕೊಂಡು ಪಾಲಿಸುವವ
ರಾಗಿರಿ. 2ಹೋರೇಬ್ (ಸೀನಾಯಿ) ಪರ್ವತದಲ್ಲಿ
ಯೆಹೋವ ದೇವರು ನಮ್ಮೊಂದಿಗೆ ಒಡಂಬಡಿಕೆಯನ್ನು
ಮಾಡಿರುತ್ತಾನೆ. 3ಯೆಹೋವನು ನಮ್ಮ ಪೂರ್ವಿಕ
ರೊಂದಿಗೆ ಒಡಂಬಡಿಕೆ ಮಾಡದೆ ನಮ್ಮೊಂದಿಗೆ ಮಾಡಿ
ದ್ದಾನೆ. ಈಗ ಜೀವಂತರಾಗಿರುವ ನಮ್ಮೊಂದಿಗೆ ಮಾಡಿರು
ತ್ತಾನೆ. 4ಆ ಪರ್ವತದಲ್ಲಿ ಯೆಹೋವನು ನಿಮ್ಮೊಂದಿಗೆ
ಮುಖಾಮುಖಿಯಾಗಿ ಬೆಂಕಿಯೊಳಗಿಂದ ನಿಮ್ಮೊಂದಿಗೆ
ಮಾತಾಡಿರುತ್ತಾನೆ. 5ಆದರೆ ನೀವು ಬೆಂಕಿಗೆ ಭಯ ಪಟ್ಟಿದ್ದ
ರಿಂದ ಬೆಟ್ಟವನ್ನು ಏರಲಿಲ್ಲ. ಆಗ ನಾನು ನಿಮಗೂ
ಯೆಹೋವನಿಗೂ ಮಧ್ಯದಲ್ಲಿದ್ದುಕೊಂಡು
ಯೆಹೋವನು ಹೇಳಿದ್ದನ್ನು ತಿಳಿಸಿದೆನು. 6ಯೆಹೋವನು
ಹೇಳಿದ್ದೇನೆಂದರೆ; ''ನಾನು ನಿಮ್ಮ ದೇವರಾದ
ಯೆಹೋವನು. ನೀವು ಈಜಿಪ್ಟಿನಲ್ಲಿ ಗುಲಾಮರಾಗಿದ್ದಾಗ
ನಿಮ್ಮನ್ನು ಅಲ್ಲಿಂದ ಬಿಡುಗಡೆ ಮಾಡಿದೆನು. ಆದುದರಿಂದ
ನೀವು ಈ ಆಜ್ಞೆಗಳಿಗೆ ವಿಧೇಯರಾಗಬೇಕು:

7''ನೀವು ನನ್ನ ಹೊರತು ಬೇರೆ ಯಾವ ದೇವರು
ಗಳನ್ನೂ ಪೂಜಿಸಬಾರದು. ನಾನೇ ನಿಮ್ಮ ದೇವರು.
8''ನೀವು ವಿಗ್ರಹಗಳನ್ನು ಮಾಡಿಕೊಳ್ಳಬಾರದು.
ಆಕಾಶದ ಮೇಲಾಗಲೀ, ಭೂಮಿಯ ಮೇಲಾಗಲೀ
ಭೂಮಿಯ ಕೆಳಗಿರುವ ನೀರಿನಲ್ಲಾಗಲೀ ಯಾವ
ವಸ್ತುಗಳ ವಿಗ್ರಹಗಳನ್ನಾಗಲೀ ಪ್ರತಿಮೆಗಳನ್ನಾಗಲೀ
ಮಾಡಿ ಕೊಳ್ಳಬಾರದು. 9ನಾನೇ ನಿಮ್ಮ ದೇವರಾದ
ಯೆಹೋವನು. ಆದ್ದರಿಂದ ನೀವು ಯಾವ ವಿಗ್ರಹ
ವನ್ನೂ ಪೂಜಿಸಬಾರದು ಮತ್ತು ಅದರ ಸೇವೆ ಮಾಡ
ಬಾರದು. ನನ್ನ ಜನರು ಇತರ ದೇವರುಗಳನ್ನು
ಆರಾಧಿಸುವುದನ್ನು ನಾನು ದ್ವೇಷಿಸುತ್ತೇನೆ. ನನಗೆ
ವಿರುದ್ಧವಾಗಿ ಪಾಪ ಮಾಡಿದವರನ್ನು ನಾನು ಶಿಕ್ಷಿಸು
ತ್ತೇನೆ. ಅವರ ಮಕ್ಕಳು, ಮೊಮ್ಮಕ್ಕಳು, ಮತ್ತು ಮರಿ
ಮೊಮ್ಮಕ್ಕಳು ನನ್ನ ದಂಡನೆಗೆ ಗುರಿಯಾಗುವರು.
10ಆದರೆ ನನ್ನನ್ನು ಪ್ರೀತಿಸಿ ನನ್ನ ಆಜ್ಞೆಗಳಿಗೆ ವಿಧೇಯ
ರಾಗುವವರ ಮೇಲೆ ನಾನು ದಯೆ ತೋರಿಸವೆನು.
ಅವರ ಕುಟುಂಬಗಳವರಿಗೆ ಸಾವಿರಾರು ತಲೆಮಾರು
ಗಳವರೆಗೂ ಕರುಣೆಯನ್ನು ತೋರಿಸುವೆನು.
11''ನಿನ್ನ ದೇವರಾದ ಯೆಹೋವನ ಹೆಸರನ್ನು
ಅಯೋಗ್ಯಕಾರ್ಯಕ್ಕಾಗಿ ಎತ್ತಬಾರದು. ಯಾರಾ
ದರೂ ಅಯೋಗ್ಯಕಾರ್ಯಕ್ಕಾಗಿ ನನ್ನ ಹೆಸರನ್ನು
ಉಪಯೋಗಿಸಿದರೆ ನಾನು ಅವನನ್ನು ಶಿಕ್ಷಿಸುವೆನು.
12''ನಿನ್ನ ದೇವರಾದ ಯೆಹೋವನು ಆಜ್ಞಾಪಿಸಿ
ದಂತೆ ಸಬ್ಬತ್ ದಿನವನ್ನು ವಿಶೇಷದಿನವೆಂದು ಪರಿ
ಗಣಿಸಬೇಕು. 13ವಾರದ ಆರು ದಿನಗಳಲ್ಲಿ ಕೆಲಸ
ಮಾಡಿರಿ. 14ಆದರೆ ಏಳನೆಯ ದಿನವು ವಿಶ್ರಾಂತಿಯ
ದಿನವಾಗಿದೆ. ಆ ದಿನ ಯಾರೂ ಕೆಲಸ ಮಾಡ
ಬಾರದು. ನೀವು ಮಾತ್ರವೇ ಅಲ್ಲ, ನಿಮ್ಮ ಮಕ್ಕಳು,
ಸೇವಕರು, ನಿಮ್ಮ ಪಶುಗಳು ನಿಮ್ಮಲ್ಲಿರುವ

ಪರದೇಶಿಯರು ಕೆಲಸಮಾಡದೆ ವಿಶ್ರಾಂತಿಯಲ್ಲಿರ
ಬೇಕು. ನಿಮ್ಮ ದೇವರಾದ ಯೆಹೋವನ ಗೌರ
ವಾರ್ಥವಾಗಿ ಸಬ್ಬತ್ ದಿನವು ವಿಶ್ರಾಂತಿಯ ದಿನ
ವಾಗಿದೆ. 15ನೀವು ಈಜಿಪ್ಟ್ ದೇಶದಲ್ಲಿ ಗುಲಾಮ
ರಾಗಿದ್ದಿರೆಂಬುದನ್ನು ಮರೆಯಬೇಡಿ. ನಿಮ್ಮ ದೇವ
ರಾದ ಯೆಹೋವನು ತನ್ನ ಭುಜಬಲದಿಂದ
ನಿಮ್ಮನ್ನು ಈಜಿಪ್ಟಿನಿಂದ ಬಿಡಿಸಿ ನಿಮ್ಮನ್ನು ಸ್ವತಂತ್ರರ
ನ್ನಾಗಿ ಮಾಡಿದನು. ಆದುದರಿಂದಲೇ ನಿಮ್ಮ
ದೇವರು ಸಬ್ಬತ್ ದಿನವನ್ನು ಆಚರಿಸಬೇಕೆಂದು
ಆಜ್ಞೆಮಾಡಿದ್ದು.

16“ನಿಮ್ಮ ತಂದೆತಾಯಿಗಳನ್ನು ನೀವು ಸನ್ಮಾನಿಸ
ಬೇಕು. ಇದು ನಿಮ್ಮ ದೇವರ ಆಜ್ಞೆ. ನೀವು ಇದಕ್ಕೆ
ವಿಧೇಯರಾದರೆ ದೇವರು ನಿಮಗೆ ಕೊಡುವ ದೇಶ
ದಲ್ಲಿ ನೀವು ಬಹುಕಾಲ ಬಾಳುವಿರಿ ಮತ್ತು ನಿಮಗೆ
ಯಾವಾಗಲೂ ಶುಭವಿರುವುದು.

17“ಕೊಲೆ ಮಾಡಬಾರದು.

18“ವ್ಯಭಿಚಾರ ಮಾಡಬಾರದು.

19“ಕದಿಯಬಾರದು.

20“ಇತರರ ವಿಷಯವಾಗಿ ಸುಳ್ಳುಸಾಕ್ಷಿ ಹೇಳ
ಬಾರದು.

21“ಇನ್ನೊಬ್ಬನ ಹೆಂಡತಿಯನ್ನು ಆಶಿಸಬಾರದು.
ಅವನ ಮನೆಯನ್ನಾಗಲೀ ಹೊಲವನ್ನಾಗಲೀ ಸೇವಕ
ರನ್ನಾಗಲೀ ದನವನ್ನಾಗಲೀ ಕತ್ತೆಗಳನ್ನಾಗಲೀ ನೀವು
ಅಪೇಕ್ಷಿಸಬಾರದು. ಇನ್ನೊಬ್ಬನ ವಸ್ತುಗಳಲ್ಲಿ
ಯಾವುದನ್ನೂ ಆಶೆಪಡಬಾರದು!”

### ಜನರು ದೇವರಿಗೆ ಹೆದರಿದರು

22ಮೋಶೆಯು ಹೇಳಿದ್ದೇನೆಂದರೆ: “ನೀವೆಲ್ಲಾ ಆ
ಬೆಟ್ಟದ ಬಳಿಯಲ್ಲಿರುವಾಗ ದೇವರಾದ ಯೆಹೋವನು
ಈ ಆಜ್ಞೆಗಳನ್ನು ನಿಮಗೆ ಕೊಟ್ಟನು. ಬೆಂಕಿ, ಮೋಡ ಮತ್ತು
ಕಾರ್ಗತ್ತಲೊಳಗಿನಿಂದ ಯೆಹೋವನು ಗಟ್ಟಿಯಾದ ಸ್ವರ
ದಲ್ಲಿ ಮಾತಾಡಿದ್ದನ್ನು ನೀವು ಕೇಳಿದಿರಿ. ಆತನು ಈ ಆಜ್ಞೆ
ಗಳನ್ನು ಕೊಟ್ಟ ಬಳಿಕ ಬೇರೆ ಏನನ್ನೂ ಹೇಳಲಿಲ್ಲ. ಆತನು
ತನ್ನ ಮಾತುಗಳನ್ನು ಎರಡು ಕಲ್ಲಿನ ಹಲಗೆಗಳ ಮೇಲೆ
ಬರೆದು ನನಗೆ ಕೊಟ್ಟನು.

23“ಬೆಟ್ಟವು ಬೆಂಕಿಯಿಂದ ಉರಿಯುತ್ತಿರುವಾಗ
ಕಾರ್ಗತ್ತಲೆಯಿಂದ ಬಂದ ಸ್ವರವನ್ನು ನೀವು ಕೇಳಿದಿರಿ.
ಆಗ ನಿಮ್ಮ ಹಿರಿಯರು, ಕುಲಪ್ರಧಾನರು ನನ್ನ ಬಳಿಗೆ
ಬಂದು ಹೇಳಿದ್ದೇನೆಂದರೆ: 24‘ನಮ್ಮ ದೇವರಾದ
ಯೆಹೋವನು ತನ್ನ ಮಹಿಮೆಯನ್ನೂ ಪ್ರತಾಪವನ್ನೂ
ನಮಗೆ ತೋರಿಸಿದ್ದಾನೆ. ಬೆಂಕಿಯೊಳಗಿಂದ ಆತನು ಮಾತ
ನಾಡಿದ್ದನ್ನು ನಾವು ಕೇಳಿದ್ದೇವೆ. ದೇವರು ಒಬ್ಬನೊಡನೆ
ಸ್ವತಃ ಮಾತನಾಡಿದ ಬಳಿಕವೂ ಅವನು ಜೀವ
ದಿಂದುಳಿಯಲು ಸಾಧ್ಯ ಎಂಬುದನ್ನು ನಾವು ಕಣ್ಣಾರೆ
ಕಂಡೆವು. 25ಆದರೆ ನಮ್ಮ ದೇವರಾದ ಯೆಹೋವನು
ಮಾತನಾಡುವುದನ್ನು ನಾವು ಮತ್ತೆ ಕೇಳಿದರೆ ಖಂಡಿತ
ವಾಗಿ ಸಾಯುವೆವು. ಆ ಭಯಂಕರವಾದ ಬೆಂಕಿಯು
ನಮ್ಮನ್ನು ದಹಿಸುವುದು. ನಮಗೆ ಸಾಯಲು ಇಷ್ಟವಿಲ್ಲ.
26ಜೀವಸ್ವರೂಪನಾದ ದೇವರ ನುಡಿಯನ್ನು ಪ್ರತ್ಯಕ್ಷವಾಗಿ
ನಾವು ಕೇಳಿದ ಹಾಗೆ ಬೇರೆ ಯಾರೂ ಕೇಳಿಲ್ಲ. ಆದರೂ
ನಾವು ಜೀವದಿಂದಿದ್ದೇವೆ. 27ಮೋಶೆಯೇ, ನೀನು ಹತ್ತಿರ
ಹೋಗಿ ಯೆಹೋವನು ಹೇಳುವುದನ್ನೆಲ್ಲಾ ಕೇಳಿ ನಮಗೆ
ಅದನ್ನು ತಿಳಿಸು. ನಾವು ನಿನ್ನ ಮಾತುಗಳನ್ನು ಕೇಳಿ ನೀನು
ಹೇಳಿದ ಹಾಗೆ ಮಾಡುವೆವು.’

### ಯೆಹೋವನು ಮೋಶೆಯ ಸಂಗಡ ಮಾತನಾಡುತ್ತಾನೆ

28“ನೀವು ಹೇಳಿದ್ದನ್ನು ಯೆಹೋವನು ಕೇಳಿ ನನ್ನೊ
ಡನೆ ಹೀಗೆಂದನು: ‘ನಿನ್ನ ಜನರು ಹೇಳುವುದನ್ನು ನಾನು
ಕೇಳಿದೆನು. ಆ ಮಾತುಗಳೆಲ್ಲಾ ಒಳ್ಳೆಯವೇ. 29ಆದರೆ
ಅವರು ಆಲೋಚಿಸುವ ರೀತಿಯನ್ನು ನಾನು ಬದಲಾಯಿ
ಸಬೇಕಾಗಿದೆ. ಅವರು ನನಗೆ ವಿಧೇಯರಾಗಿ ನನ್ನ ಆಜ್ಞೆ
ಗಳನ್ನೆಲ್ಲಾ ಅನುಸರಿಸಿ ತಮ್ಮ ಹೃದಯಗಳಿಂದ ನನ್ನನ್ನು
ಗೌರವಿಸಬೇಕು. ಆಗ ಅವರಿಗೂ ಅವರ ಸಂತತಿಯ
ವರಿಗೂ ಶಾಶ್ವತವಾಗಿ ಶುಭವಿರುವುದು.

30“ನೀನು ಹೋಗಿ ಜನರಿಗೆ ಅವರವರ ಗುಡಾರಗಳ
ಹಿಂಭಾಗಕ್ಕೆ ಹೋಗಲು ತಿಳಿಸು. 31ಆದರೆ ಮೋಶೆಯೇ,
ನೀನು ನನ್ನ ಬಳಿಯಲ್ಲಿಯೇ ನಿಂತಿರು. ನೀನು ಅವರಿಗೆ
ಉಪದೇಶಿಸಬೇಕಾಗಿರುವ ಎಲ್ಲಾ ಆಜ್ಞೆಗಳನ್ನು, ಕಟ್ಟಳೆಗ
ಳನ್ನು ಮತ್ತು ನಿಯಮಗಳನ್ನು ನಾನು ನಿನಗೆ ತಿಳಿಸುತ್ತೇನೆ.
ಅವರ ವಾಸಕ್ಕಾಗಿ ನಾನು ಕೊಡಲಿರುವ ದೇಶದಲ್ಲಿ ಅವರು
ಇವುಗಳೆಲ್ಲವನ್ನು ಪರಿಪಾಲಿಸಬೇಕು.’

32“ಆದುದರಿಂದ, ಇಸ್ರೇಲ್ ಜನರೇ, ಯೆಹೋವನು
ಆಜ್ಞಾಪಿಸಿದನ್ನೆಲ್ಲಾ ಅನುಸರಿಸಲು ನೀವು ಎಚ್ಚರದಿಂದಿರ
ಬೇಕು. ಆತನನ್ನು ಹಿಂಬಾಲಿಸುವುದನ್ನು ನಿಲ್ಲಿಸಬೇಡಿ.
33ನಿಮ್ಮ ದೇವರಾದ ಯೆಹೋವನು ಹೇಳಿದ ಆಜ್ಞೆ
ಗಳಿಗನುಸಾರವಾಗಿ ನಡೆದರೆ ನೀವು ಜೀವಿಸುವಿರಿ. ಆಗ
ನೀವು ಶುಭವನ್ನೇ ಹೊಂದುವಿರಿ. ನಿಮಗೆ ದೊರಕಿದ
ಸ್ವಾಸ್ತ್ಯ ಭೂಮಿಯಲ್ಲಿ ನೀವು ಬಹುಕಾಲ ಬಾಳುವಿರಿ.

### ಯಾವಾಗಲೂ ದೇವರನ್ನು ಪ್ರೀತಿಸಿ ಆತನಿಗೆ ವಿಧೇಯರಾಗಿರಿ

6 “ನಿಮ್ಮ ದೇವರಾದ ಯೆಹೋವನು ನಿಮಗೆ ಉಪ
ದೇಶಿಸಲೆಂದು ನನಗೆ ಕೊಟ್ಟ ಆಜ್ಞೆಗಳು, ಕಟ್ಟಳೆಗಳು
ಮತ್ತು ನಿಯಮಗಳು ಇವೇ. ನೀವು ವಾಸಮಾಡಲು
ಪ್ರವೇಶಿಸಲಿರುವ ದೇಶದಲ್ಲಿ ಅವುಗಳನ್ನು ಪಾಲಿಸಿರಿ.

2ನೀವೂ ಮತ್ತು ನಿಮ್ಮ ಸಂತತಿಯವರೂ ಜೀವಿಸುವ ದಿನ
ಗಳಲ್ಲೆಲ್ಲಾ ದೇವರಾದ ಯೆಹೋವನನ್ನು ಗೌರವಿಸ
ಬೇಕು. ನಾನೀಗ ಕೊಡುವ ಎಲ್ಲಾ ಆಜ್ಞೆಗಳನ್ನೂ ಕಟ್ಟಳೆ
ಗಳನ್ನೂ ಅನುಸರಿಸಬೇಕು. ಹಾಗೆ ಮಾಡಿದ್ದಲ್ಲಿ ನೀವು
ನೆಲೆಸುವ ಜಾಗದಲ್ಲಿ ನೀವು ಬಹುಕಾಲ ಜೀವಿಸುವಿರಿ.
3ಇಸ್ರೇಲಿನ ಜನರೇ, ಕಿವಿಗೊಟ್ಟು ಕೇಳಿರಿ. ದೇವರ ಆಜ್ಞೆ
ಗಳಿಗೆ ವಿಧೇಯರಾಗಿರಿ. ಆಗ ನಿಮಗೆ ಎಲ್ಲಾದರಲ್ಲಿ ಶುಭ
ವಾಗುವುದು. ನಿಮಗೆ ಹೆಚ್ಚು ಮಕ್ಕಳಾಗುವವು. ನೀವು
ನೆಲೆಸುವ ದೇಶವು ನಿಮ್ಮ ಪೂರ್ವಿಕರಿಗೆ ದೇವರು ವಾಗ್ದಾನ
ಮಾಡಿದ ಪ್ರಕಾರ ಫಲಭರಿತವಾಗುವುದು.

4“ಇಸ್ರೇಲಿನ ಜನರೇ, ಕಿವಿಗೊಡಿರಿ. ಯೆಹೋವನೇ
ನಮ್ಮ ದೇವರು. ದೇವರು ಒಬ್ಬನೇ! 5ನಿಮ್ಮ ದೇವರಾದ
ಯೆಹೋವನನ್ನು ನಿಮ್ಮ ಪೂರ್ಣಆತ್ಮದಿಂದಲೂ ಪೂರ್ಣ
ಶಕ್ತಿಯಿಂದಲೂ, ಪೂರ್ಣಹೃದಯದಿಂದಲೂ ಪ್ರೀತಿಸ
ಬೇಕು. 6ನಾನೀಗ ಕೊಡುವ ಆಜ್ಞೆಗಳನ್ನು ಯಾವಾಗಲೂ
ನಿಮ್ಮ ಜ್ಞಾಪಕದಲ್ಲಿಟ್ಟುಕೊಂಡಿರಿ. 7ನಿಮ್ಮ ಮಕ್ಕಳಿಗೆ
ಇದನ್ನು ಕಲಿಸಲು ಮರೆಯಬೇಡಿರಿ. ನಿಮ್ಮ ಮನೆಗಳಲ್ಲಿ
ಕುಳಿತಿರುವಾಗ, ರಸ್ತೆಗಳಲ್ಲಿ ನಡೆಯುತ್ತಿರುವಾಗ, ನೀವು
ಮಲಗಿರುವಾಗ, ಎದ್ದಾಗ ಈ ಆಜ್ಞೆಗಳ ಕುರಿತಾಗಿ
ಮಾತಾಡಿಕೊಳ್ಳಿರಿ. 8ಈ ಆಜ್ಞೆಗಳನ್ನು ಬರೆದು ನಿಮ್ಮ
ಕೈಗಳಿಗೆ ಕಟ್ಟಿರಿ, ನಿಮ್ಮ ಹಣೆಗಳ ಮೇಲೆ ಕಟ್ಟಿರಿ. ಇವು
ನನ್ನ ಭೋಧನೆಯ ವಿಚಾರವಾಗಿ ನಿಮಗೆ ಜ್ಞಾಪಕ ಹುಟ್ಟಿ
ಸಲು ಸಹಾಯವಾಗುವುದು. 9ಅವುಗಳನ್ನು ನಿಮ್ಮ ಬಾಗಿ
ಲಿನ ಮೇಲೆಯೂ ನಿಲುವು ಪಟ್ಟಿಗಳ ಮೇಲೆಯೂ
ಬರೆಯಿರಿ.

10“ದೇವರಾದ ಯೆಹೋವನು ನಮಗೆ ಈ ದೇಶವನ್ನು
ಕೊಡುವುದಾಗಿ ನಮ್ಮ ಪೂರ್ವಿಕರಾದ ಅಬ್ರಹಾಮನಿಗೆ,
ಇಸಾಕನಿಗೆ ಮತ್ತು ಯಾಕೋಬನಿಗೆ ವಾಗ್ದಾನ ಮಾಡಿ
ದ್ದನು. ಈಗ ಆ ದೇಶವನ್ನು ನಿಮಗೆ ಕೊಡುತ್ತಿದ್ದಾನೆ.
ಅದರಲ್ಲಿರುವ ದೊಡ್ಡ ದೊಡ್ಡ ನಗರಗಳನ್ನು ನೀವು
ಕೈಯಿಂದ ಕಟ್ಟಲಿಲ್ಲ. 11ನೀವು ಕೂಡಿಸಿಡದ ಉತ್ತಮ ವಸ್ತು
ಗಳಿಂದ ತುಂಬಿರುವ ಮನೆಗಳನ್ನು ಯೆಹೋವನು ನಿಮಗೆ
ಕೊಡುತ್ತಾನೆ. ನೀವು ತೋಡದಿರುವ ಬಾವಿಗಳನ್ನು ನಿಮಗೆ
ಕೊಡುವನು. ನೀವು ನೆಡದಿರುವ ದ್ರಾಕ್ಷಾತೋಟಗಳನ್ನೂ
ಎಣ್ಣೆಮರಗಳ ತೋಪುಗಳನ್ನೂ ನಿಮಗೆ ಕೊಡುವನು.
ನಿಮಗೆ ತಿನ್ನಲು ಯಾವ ಕೊರತೆಯೂ ಇರುವುದಿಲ್ಲ.

12“ನಿಮ್ಮ ದೇವರಾದ ಯೆಹೋವನನ್ನು ಸನ್ಮಾನಿಸಿ
ಆತನನ್ನೇ ಸೇವಿಸಿರಿ. ಆತನನ್ನು ಮರೆತುಬಿಡಬೇಡಿರಿ.
ಈಜಿಪ್ಟ್ ದೇಶದಲ್ಲಿ ಗುಲಾಮರಾಗಿದ್ದಾಗ ಆತನೇ
ನಿಮ್ಮನ್ನು ವಿಮೋಚಿಸಿದನಲ್ಲಾ? 13ಆತನ ಹೆಸರಿನಲ್ಲಿಯೇ
ವಾಗ್ದಾನಗಳನ್ನು ಮಾಡಿರಿ. ಅನ್ಯದೇವರ ಹೆಸರಿನಲ್ಲಿ
ಮಾಡಕೂಡದು. 14ಇತರ ದೇವರುಗಳನ್ನು ಅವಲಂಭಿಸ
ಬಾರದು. ನಿಮ್ಮ ಸುತ್ತಲೂ ಇರುವವರ ದೇವರುಗಳನ್ನು
ಪೂಜಿಸಬಾರದು. 15ನಿಮ್ಮ ದೇವರಾದ ಯೆಹೋವನು
ಯಾವಾಗಲೂ ನಿಮ್ಮ ಜೊತೆಯಲ್ಲಿರುವನು. ಸುಳ್ಳು
ದೇವರನ್ನು ಪೂಜಿಸುವವರನ್ನು ಯೆಹೋವನು ದ್ವೇಷಿಸು
ವದರಿಂದ ಅವರನ್ನು ಈ ಲೋಕದಿಂದ ಅಳಿಸಿಬಿಡುವನು.

16“ಮಸ್ಸಾದಲ್ಲಿ ನೀವು ನಿಮ್ಮ ದೇವರನ್ನು ಪರೀಕ್ಷಿಸಿ
ದಂತೆ ಆತನನ್ನು ಪರೀಕ್ಷಿಸಬಾರದು. 17ಆತನ ಆಜ್ಞೆಗಳಿಗೆ
ವಿಧೇಯರಾಗಿರಲು ಎಚ್ಚರದಿಂದಿರಬೇಕು. ಆತನು
ನಿಮಗೆ ಕೊಟ್ಟ ವಿಧಿನಿಯಮಗಳನ್ನು ಪರಿಪಾಲಿಸಲು
ತಯಾರಾಗಿರಬೇಕು. 18ಯೋಗ್ಯವಾದವುಗಳನ್ನು, ಸರಿ
ಯಾದವುಗಳನ್ನು ಮತ್ತು ಯೆಹೋವನು ಮೆಚ್ಚುವ
ಕಾರ್ಯಗಳನ್ನು ನೀವು ಮಾಡಬೇಕು. ಆಗ ನಿಮ್ಮ
ಕಾರ್ಯಗಳೆಲ್ಲವೂ ಸಫಲವಾಗುವುವು. ಅಲ್ಲದೆ
ಯೆಹೋವನು ನಿಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿದ
ದೇಶದೊಳಗೆ ನೀವು ಹೋಗಿ ಅದನ್ನು ವಶಪಡಿಸಿಕೊಳ್ಳ
ಬಹುದು. 19ಯೆಹೋವನು ಹೇಳಿದಂತೆಯೇ, ಅಲ್ಲಿ ವಾಸ
ವಾಗಿರುವ ನಿಮ್ಮ ವೈರಿಗಳನ್ನೆಲ್ಲಾ ಹೊರಗಟ್ಟುವಿರಿ.

## ದೇವರ ಕಾರ್ಯಗಳನ್ನು ನಿಮ್ಮ ಮಕ್ಕಳಿಗೆ ತಿಳಿಸಬೇಕು

20“ಮುಂದಿನ ದಿನಗಳಲ್ಲಿ ನಿಮ್ಮ ಮಗನು ನಿಮಗೆ ಈ
ಪ್ರಶ್ನೆ ಹಾಕಿಯಾನು, ‘ಯೆಹೋವದೇವರು ನಮಗೆ
ನ್ಯಾಯವಿಧಿ ನಿಯಮಗಳನ್ನು ಕೊಟ್ಟಿರುತ್ತಾನೆ. ಇವುಗಳ
ಅರ್ಥವೇನು?’ 21ಆಗ ನೀವು ಹೀಗೆ ಉತ್ತರಿಸಬೇಕು,
‘ನಾವು ಈಜಿಪ್ಟಿನಲ್ಲಿ ಫರೋಹನ ಗುಲಾಮರಾಗಿದ್ದೆವು.
ಆದರೆ ನಮ್ಮ ದೇವರಾದ ಯೆಹೋವನು ತನ್ನ ಪರಾಕ್ರಮ
ದಿಂದ ನಮ್ಮನ್ನು ಬಿಡುಗಡೆ ಮಾಡಿದನು.
22ಯೆಹೋವನು ಈಜಿಪ್ಟಿನವರನ್ನೂ ಫರೋಹನನ್ನೂ
ಅವನ ಪರಿವಾರದವರನ್ನೂ ಸೂಚಕಕಾರ್ಯಗಳಿಂದಲೂ
ಅದ್ಭುತಕಾರ್ಯಗಳಿಂದಲೂ ಮಹತ್ಕಾರ್ಯಗಳಿಂದಲೂ
ಭಯಂಕರ ಕಾರ್ಯಗಳಿಂದಲೂ ಬಾಧಿಸಿದನು.
23ಯೆಹೋವನು ನಮ್ಮ ಪೂರ್ವಿಕರಿಗೆ ಮಾಡಿದ ವಾಗ್ದಾನ
ದಂತೆ ನಮಗೆ ಆ ದೇಶವನ್ನು ಕೊಡುವುದಕ್ಕಾಗಿ ನಮ್ಮನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದನು. 24ಈ ಉಪ
ದೇಶಗಳನ್ನೆಲ್ಲಾ ಅನುಸರಿಸಬೇಕೆಂದು ಯೆಹೋವನು
ನಮಗೆ ಆಜ್ಞಾಪಿಸಿದ್ದಾನೆ. ನಮ್ಮ ದೇವರಾದ ಯೆಹೋವ
ನನ್ನು ನಾವು ಗೌರವಿಸತಕ್ಕದ್ದು. ಆಗ ಇಂದಿನಂತೆ
ಯೆಹೋವನು ನಮ್ಮನ್ನು ಜೀವಂತವಾಗಿರಿಸಿ ನಮಗೆ
ಒಳ್ಳೆಯದನ್ನು ಮಾಡುತ್ತಾನೆ. 25ನಮ್ಮ ದೇವರಾದ
ಯೆಹೋವನು ಹೇಳಿದಂತೆಯೇ, ಇಡೀ ಧರ್ಮಶಾಸ್ತ್ರಕ್ಕೆ
ನಾವು ಚಾಚೂತಪ್ಪದೆ ಎಚ್ಚರಿಕೆಯಿಂದ ವಿಧೇಯರಾದರೆ,
ನಾವು ಒಳ್ಳೆಯದನ್ನು ಮಾಡಿದೆವೆಂದು ದೇವರು
ಹೇಳುತ್ತಾನೆ.’

## ಇಸ್ರೇಲ್, ದೇವಜನಾಂಗ

7 ‘‘ನಿಮಗೆ ಸ್ವಾಸ್ತ್ಯವಾಗಿ ಕೊಡುವ ದೇಶಕ್ಕೆ
ಯೆಹೋವನು ನಿಮ್ಮನ್ನು ನಡೆಸುವನು. ನಿಮಗಿಂತ
ಬಲಿಷ್ಠವಾಗಿದ್ದು ಅಲ್ಲಿ ವಾಸಿಸುತ್ತಿರುವ ಹಿತ್ತಿಯರು,
ಗಿರ್ಗಾಷಿಯರು ಅಮೋರಿಯರು, ಕಾನಾನ್ಯರು, ಪೆರಿಜ್ಜೀ
ಯರು, ಹಿವ್ವಿಯರು ಮತ್ತು ಯೆಬೂಸಿಯರು ಎಂಬ ಏಳು
ಜನಾಂಗಗಳನ್ನು ಆ ದೇಶದಿಂದ ನಿಮಗಾಗಿ ಹೊರಗಟ್ಟು
ವನು. 2ನಿಮ್ಮ ದೇವರಾದ ಯೆಹೋವನು ಆ ಜನಾಂಗ
ಗಳನ್ನು ನಿಮಗೆ ಅಧೀನಪಡಿಸುವನು. ನೀವು ಅವರನ್ನು
ಸೋಲಿಸಿಬಿಡುವಿರಿ. ನೀವು ಅವರನ್ನು ಸಂಪೂರ್ಣವಾಗಿ
ನಾಶಮಾಡಬೇಕು. ಅವರೊಂದಿಗೆ ಒಡಂಬಡಿಕೆಯನ್ನು
ಮಾಡಿಕೊಳ್ಳಬೇಡಿ ಮತ್ತು ಅವರಿಗೆ ಕರುಣೆಯನ್ನು
ತೋರಬೇಡಿ. 3ಅವರೊಳಗಿಂದ ಹೆಣ್ಣನ್ನು ತರಬೇಡಿ.
ನಿಮ್ಮ ಗಂಡುಮಕ್ಕಳಾಗಲೀ ಹೆಣ್ಣುಮಕ್ಕಳಾಗಲೀ ಅವ
ರನ್ನು ಮದುವೆಯಾಗಬಾರದು. 4ಯಾಕಂದರೆ, ನನ್ನನ್ನು
ಹಿಂಬಾಲಿಸದಂತೆ ಅವರು ನಿಮ್ಮ ಮಕ್ಕಳನ್ನು ಮಾರ್ಪಡಿಸು
ವರು. ಆಗ ನಿಮ್ಮ ಮಕ್ಕಳು ಅನ್ಯದೇವರುಗಳ ಸೇವೆ
ಮಾಡುವರು. ಆಗ ಯೆಹೋವನು ನಿಮ್ಮ ಮೇಲೆ ಬಹಳ
ಕೋಪಗೊಂಡು ನಿಮ್ಮನ್ನು ಬೇಗನೆ ನಾಶಮಾಡುವನು.

## ಸುಳ್ಳುದೇವರುಗಳನ್ನು ನಾಶಮಾಡಿರಿ

5‘‘ಆ ಜನಾಂಗಗಳ ಯಜ್ಞವೇದಿಕೆಗಳನ್ನೆಲ್ಲಾ ನೀವು
ಕೆಡವಿಹಾಕಿ ನೆಲಸಮಮಾಡಬೇಕು. ಅವರ ಸ್ಮಾರಕ
ಕಲ್ಲುಗಳನ್ನು ಒಡೆದು ಚೂರುಚೂರು ಮಾಡಬೇಕು.
ಅವರ ಅಶೇರಸ್ತಂಭಗಳನ್ನು ಕತ್ತರಿಸಿಹಾಕಬೇಕು; ಅವು
ಗಳ ಪ್ರತಿಮೆಗಳನ್ನು ಸುಟ್ಟುಹಾಕಬೇಕು. 6ಯಾಕಂದರೆ
ನೀವು ಯೆಹೋವನ ಪ್ರಜೆಗಳಾಗಿದ್ದೀರಿ. ಭೂಲೋಕದ
ಲ್ಲಿರುವ ಎಲ್ಲಾ ಜನಾಂಗಗಳಿಂದ ಆತನು ನಿಮ್ಮನ್ನು ಆರಿಸಿ
ಕೊಂಡಿದ್ದಾನೆ. ನೀವು ಆತನ ಸ್ವಕೀಯ ಪ್ರಜೆಯಾಗಿದ್ದೀರಿ.
7ದೇವರು ನಿಮ್ಮನ್ನೇ ಯಾಕೆ ಪ್ರೀತಿಸಿ ಆರಿಸಿಕೊಂಡನು?
ನೀವು ದೊಡ್ಡ ಜನಾಂಗವಾಗಿರುವ ಕಾರಣದಿಂದಲ್ಲ.
ನಿಜವಾಗಿಯೂ ನೀವು ಚಿಕ್ಕ ಜನಾಂಗವೇ. 8ಆದರೆ
ಯೆಹೋವನು ತನ್ನ ಪರಾಕ್ರಮವನ್ನು ತೋರಿಸಿ ನಿಮ್ಮನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದನು. ನಿಮ್ಮನ್ನು
ದಾಸತ್ವದಿಂದ ಬಿಡುಗಡೆ ಮಾಡಿದನು; ಫರೋಹನ ಹಿಡಿತ
ದಿಂದ ನಿಮ್ಮನ್ನು ಬಿಡಿಸಿದನು; ಯಾಕಂದರೆ ಆತನು
ನಿಮ್ಮನ್ನು ಪ್ರೀತಿಸುತ್ತಾನೆ; ನಿಮ್ಮ ಪೂರ್ವಿಕರಿಗೆ ತಾನು
ಮಾಡಿದ ವಾಗ್ದಾನವನ್ನು ನೆರವೇರಿಸಬೇಕೆಂದಿದ್ದಾನೆ.

9‘‘ಆದುದರಿಂದ ನಿಮ್ಮ ದೇವರಾದ ಯೆಹೋವ
ನೊಬ್ಬನೇ ನಿಜವಾದ ದೇವರೆಂಬುದು ನಿಮಗೆ ತಿಳಿದಿರಲಿ.
ನೀವು ಆತನ ಮೇಲೆ ಭರವಸವಿಡಬಹುದು. ಆತನು ತಾನು
ಮಾಡಿದ ಒಡಂಬಡಿಕೆಯನ್ನು ನೆರವೇರಿಸುವಾತನಾಗಿ
ದ್ದಾನೆ. ಆತನನ್ನು ಪ್ರೀತಿಸಿ ಆತನ ಕಟ್ಟಳೆಗಳಿಗೆ
ವಿಧೇಯರಾಗುವವರನ್ನೆಲ್ಲ ಆತನು ಪ್ರೀತಿಸುತ್ತಾನೆ;
ಅವರಿಗೆ ಕರುಣೆ ತೋರುತ್ತಾನೆ. ಈ ಪ್ರೀತಿ, ಕರುಣೆಗಳು
ಸಾವಿರಾರು ತಲೆಮಾರುಗಳವರೆಗೂ ಮುಂದುವರಿಯು
ವವು. 10ಆದರೆ ಆತನು ತನ್ನನ್ನು ದ್ವೇಷಿಸುವವರನ್ನು ಶಿಕ್ಷಿಸು
ತ್ತಾನೆ. ತನ್ನನ್ನು ದ್ವೇಷಿಸುವ ಜನರನ್ನು ಶಿಕ್ಷಿಸಲು ಆತನು
ನಿಧಾನ ಮಾಡುವುದಿಲ್ಲ. 11ಆದುದರಿಂದ ನಾನು ಈ ದಿನ
ನಿಮಗೆ ಕೊಡುವ ಆಜ್ಞಾವಿಧಿನಿಯಮಗಳನ್ನು ನೀವು
ಚೆನ್ನಾಗಿ ಮನದಟ್ಟುಮಾಡಿಕೊಳ್ಳಬೇಕು.

12‘‘ನೀವು ಈ ಕಟ್ಟಳೆಗಳಿಗೆ ಕಿವಿಕೊಡುವುದಾದರೆ
ಮತ್ತು ಅವುಗಳಿಗೆ ಎಚ್ಚರಿಕೆಯಿಂದ ವಿಧೇಯರಾದರೆ,
ನಿಮ್ಮ ದೇವರಾದ ಯೆಹೋವನು ನಿಮ್ಮ ಪೂರ್ವಿಕ
ರೊಡನೆ ಮಾಡಿಕೊಂಡ ಪ್ರೀತಿಯ ಒಡಂಬಡಿಕೆಯನ್ನು
ನೆರವೇರಿಸುವನು. 13ಮತ್ತು ಆತನು ಆಶೀರ್ವದಿಸುವನು.
ನಿಮ್ಮ ಜನಾಂಗವು ವೃದ್ಧಿಯಾಗುವಂತೆ ಮಾಡುವನು.
ನಿಮ್ಮನ್ನೂ ನಿಮ್ಮ ಮಕ್ಕಳನ್ನೂ ಆಶೀರ್ವದಿಸುವನು. ನಿಮ್ಮ
ಹೊಲಗಳಲ್ಲಿ ಸಮೃದ್ಧಿಯಾದ ಬೆಳೆಯು ಉಂಟಾಗುವಂತೆ
ಆಶೀರ್ವದಿಸುವನು. ಆತನು ನಿಮಗೆ ಧಾನ್ಯ, ಹೊಸ
ದ್ರಾಕ್ಷಾರಸ ಮತ್ತು ಎಣ್ಣೆಗಳನ್ನು ಕೊಡುವನು. ನಿಮ್ಮ ದನ
ಕುರಿಗಳು ಮರಿಗಳನ್ನು ಈಯುವಂತೆ ಆಶೀರ್ವದಿಸು
ವನು. ನಿಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿದ ದೇಶದಲ್ಲಿ
ನೀವು ನೆಲೆಸಿರುವಾಗ ನಿಮಗೆ ಈ ಆಶೀರ್ವಾದಗಳೆಲ್ಲಾ
ಪ್ರಾಪ್ತವಾಗುವವು.

14‘‘ಎಲ್ಲಾ ಜನರಿಗಿಂತ ನೀವು ಹೆಚ್ಚಾಗಿ ಆಶೀರ್ವದಿಸ
ಲ್ಪಡುವಿರಿ. ಪ್ರತಿಯೊಂದು ಕುಟುಂಬದಲ್ಲಿ ಹೆಚ್ಚು ಮಕ್ಕಳಿ
ರುವರು. ನಿಮ್ಮ ಹಸುಗಳು ಮರಿಗಳನ್ನು ಈಯುವವು.
15ನಿಮ್ಮಿಂದ ಎಲ್ಲಾ ತರದ ಕಾಯಿಲೆಗಳನ್ನು
ಯೆಹೋವನು ತೆಗೆದು ಹಾಕುವನು. ಈಜಿಪ್ಟಿನಲ್ಲಿ
ನಿಮ್ಮನ್ನು ಬಾಧಿಸುತ್ತಿದ್ದ ಭಯಂಕರ ಕಾಯಿಲೆಗಳು
ನಿಮ್ಮನ್ನು ಬಾಧಿಸುವುದಿಲ್ಲ. ಆ ಕಾಯಿಲೆಗಳು ನಿಮ್ಮ ವೈರಿ
ಗಳಿಗೆ ಉಂಟಾಗುವವು. 16ಆ ದೇಶದಲ್ಲಿ ನೀವು
ಯೆಹೋವನ ಸಹಾಯದಿಂದ ಸೋಲಿಸುವ ಜನರನ್ನೆಲ್ಲಾ
ಕೊಂದುಬಿಡಬೇಕು. ಅವರಿಗೆ ಕನಿಕರ ತೋರಬಾರದು.
ಅವರ ದೇವರುಗಳನ್ನು ಪೂಜಿಸಕೂಡದು! ಯಾಕಂದರೆ
ಅವು ನಿಮಗೆ ಉರುಲಾಗಿ ನಿಮ್ಮ ಜೀವಿತವನ್ನು ಹಾಳು
ಮಾಡುತ್ತವೆ.

## ತನ್ನ ಜನರಿಗೆ ಸಹಾಯ ಮಾಡುವುದಾಗಿ ಯೆಹೋವನ ವಾಗ್ದಾನ

17‘‘ನಿಮ್ಮ ಮನಸ್ಸಿನಲ್ಲಿ, ‘ಈ ಜನಾಂಗಗಳು ನಮ್ಮ
ಜನಾಂಗಗಳಿಗಿಂತ ದೊಡ್ಡದಾಗಿವೆ. ಇವರನ್ನು ಹೇಗೆ
ಹೋಲಿಸಲು ಸಾಧ್ಯವೇ? 18ನೀವು ಅವರಿಗೆ ಭಯಪಡ
ಬಾರದು. ನಿಮ್ಮ ದೇವರಾದ ಯೆಹೋವನು

ಫರೋಹನಿಗೂ ಈಜಿಪ್ಟಿನ ಎಲ್ಲಾ ಜನರಿಗೂ ಮಾಡಿ
ದ್ದನ್ನು ನೆನಪು ಮಾಡಿಕೊಳ್ಳಿರಿ. [19]ಆತನು ಸೂಚಕಕಾರ್ಯ
ಗಳನ್ನೂ ಅದ್ಭುತಕಾರ್ಯಗಳನ್ನೂ ನಡೆಸಿದ್ದನ್ನು ನೀವು
ನೋಡಿದಿರಿ. ಆತನು ನಿಮ್ಮನ್ನು ಈಜಿಪ್ಟಿನಿಂದ ಕರೆದು
ಕೊಂಡು ಬರಲು ತನ್ನ ಮಹಾಶಕ್ತಿಯನ್ನೂ ಬಲವನ್ನೂ
ಬಳಸಿದ್ದನ್ನು ನೀವು ನೋಡಿದಿರಿ. ನೀವು ಭಯಪಡುವ
ಎಲ್ಲಾ ಜನರ ಮೇಲೆ ದೇವರಾದ ಯೆಹೋವನು ಅದೇ
ಶಕ್ತಿಯನ್ನು ಬಳಸುವನು. [20]“ನಿಮ್ಮಿಂದ ತಪ್ಪಿಸಿಕೊಂಡು
ಅಡಗಿಕೊಳ್ಳುವ ಜನರನ್ನು ಹತಿಸಲು ದೇವರು ಕಡಜದ
ಹುಳಗಳನ್ನು ಅವರ ಮಧ್ಯಕ್ಕೆ ಕಳುಹಿಸುವನು ಮತ್ತು ಅವರ
ನ್ನೆಲ್ಲಾ ನಾಶ ಮಾಡುವನು. [21]ಅವರಿಗೆ ನೀವು ಭಯಪಡ
ಬೇಡಿರಿ; ಯಾಕಂದರೆ ಮಹಾದೇವರು ನಿಮ್ಮೊಂದಿಗಿ
ದ್ದಾನೆ. ಆತನು ಭಯಂಕರನಾಗಿದ್ದಾನೆ. [22]ನಿಮ್ಮ ದೇವ
ರಾದ ಯೆಹೋವನು ಆ ಜನಾಂಗಗಳವರನ್ನು ಸ್ವಲ್ಪ ಸ್ವಲ್ಪ
ವಾಗಿಯೇ ಅಲ್ಲಿಂದ ತೆಗೆದುಬಿಡುವನು. ನೀವು ಒಂದೇ
ಸಮಯಕ್ಕೆ ಎಲ್ಲರನ್ನು ನಾಶಮಾಡಬಾರದು. ಹಾಗೆ
ಮಾಡಿದ್ದಲ್ಲಿ ದೇಶದಲ್ಲೆಲ್ಲಾ ಕಾಡುಪ್ರಾಣಿಗಳು ತುಂಬಿ
ಹೋಗುತ್ತವೆ. [23]ನಿಮ್ಮ ದೇವರಾದ ಯೆಹೋವನು ಆ
ಜನಾಂಗಗಳವರನ್ನು ಸೋಲಿಸಲು ನಿಮಗೆ ಅವಕಾಶ
ಮಾಡಿಕೊಡುವನು. ಯುದ್ಧಮಾಡುವಾಗ ಅವರ ಮಧ್ಯ
ದಲ್ಲಿ ಗಲಿಬಿಲಿ ಹುಟ್ಟಿಸಿ ಅವರು ನಾಶವಾಗುವಂತೆ ಮಾಡು
ವನು. [24]ಅವರ ರಾಜರನ್ನು ನೀವು ಸೋಲಿಸುವಂತೆ
ಮಾಡುವನು. ನೀವು ಅವರನ್ನು ಕೊಂದು ಅವರ ಹೆಸರು
ಉಳಿಯದಂತೆ ಮಾಡುವಿರಿ. ನಿಮ್ಮನ್ನು ಯಾರೂ ತಡೆಯ
ಲಾರರು. ನೀವು ಪ್ರತಿಯೊಬ್ಬರನ್ನು ನಾಶಮಾಡಿ
ಬಿಡುವಿರಿ.

[25]“ಅವರ ದೇವರುಗಳ ಪ್ರತಿಮೆಗಳನ್ನು ಬೆಂಕಿಯಲ್ಲಿ
ಸುಟ್ಟುಬಿಡಬೇಕು. ಅವರ ವಿಗ್ರಹಗಳಲ್ಲಿರುವ ಬೆಳ್ಳಿ
ಬಂಗಾರಗಳನ್ನು ನೀವು ತೆಗೆದುಕೊಳ್ಳಬೇಡಿ. ನೀವು
ತೆಗೆದುಕೊಂಡರೆ ಅವು ನಿಮಗೆ ಉರುಲಾಗಿ ನಿಮ್ಮನ್ನೇ
ನಾಶಮಾಡುತ್ತವೆ. ಯಾಕಂದರೆ ನಿಮ್ಮ ದೇವರಾದ
ಯೆಹೋವನು ವಿಗ್ರಹಗಳನ್ನು ದ್ವೇಷಿಸುತ್ತಾನೆ. [26]ಅಂಥ
ಅಸಹ್ಯ ವಿಗ್ರಹಗಳನ್ನು ನಿಮ್ಮ ಮನೆಯೊಳಗೆ ತರಲೂ
ಬಾರದು, ಅವುಗಳನ್ನು ಬಯಸಲೂಬಾರದು; ನೀವು
ಅವುಗಳನ್ನು ದ್ವೇಷಿಸಬೇಕು ಮತ್ತು ನಾಶಮಾಡಬೇಕು.
ಇಲ್ಲವಾದರೆ ನೀವೂ ಅದರಂತೆಯೇ ನಾಶನಕ್ಕೆ ಗುರಿ
ಯಾಗುವಿರಿ.

### ದೇವರಾದ ಯೆಹೋವನನ್ನು ಸ್ಮರಿಸಿರಿ

8 “ನಾನು ಈ ದಿನ ಕೊಡುವ ಎಲ್ಲಾ ಆಜ್ಞೆಗಳನ್ನು ನೀವು
ಅನುಸರಿಸಬೇಕು. ಆಗ ನೀವು ದೊಡ್ಡ ಜನಾಂಗ
ವಾಗಿ ಅಭಿವೃದ್ಧಿಯಾಗುವಿರಿ. ನಿಮ್ಮ ಪೂರ್ವಿಕರಿಗೆ
ಯೆಹೋವನು ವಾಗ್ದಾನ ಮಾಡಿದ ದೇಶವನ್ನು ನೀವು
ಪಡೆದುಕೊಳ್ಳುವಿರಿ. [2]ನಿಮ್ಮ ದೇವರಾದ ಯೆಹೋವನು
ಈ ನಲವತ್ತು ವರುಷಗಳ ನಿಮ್ಮ ಅರಣ್ಯ ಪ್ರಯಾಣವನ್ನು
ನಡೆಸಿದ್ದನ್ನು ನೀವು ಯಾವಾಗಲೂ ಸ್ಮರಿಸಬೇಕು.
ಯೆಹೋವನು ನಿಮ್ಮನ್ನು ಪರೀಕ್ಷಿಸುತ್ತಿದ್ದನು ಮತ್ತು
ನಿಮ್ಮನ್ನು ದೀನರನ್ನಾಗಿ ಮಾಡಬೇಕೆಂದಿದ್ದನು. ನಿಮ್ಮ
ಹೃದಯದ ಆಲೋಚನೆಗಳನ್ನು ಆತನು ತಿಳಿದುಕೊಳ್ಳ
ಬೇಕೆಂದಿದ್ದನು; ನೀವು ಆತನ ಆಜ್ಞೆಗಳಿಗೆ ವಿಧೇಯರಾಗು
ವಿರೋ ಇಲ್ಲವೋ ಎಂಬುದನ್ನು ತಿಳಿದುಕೊಳ್ಳ ಬೇಕೆಂದಿ
ದ್ದನು. [3]ಯೆಹೋವನು ನಿಮ್ಮನ್ನು ದೀನರನ್ನಾಗಿ ಮಾಡಿ
ನಿಮಗೆ ಹಸಿವೆಯಾಗುವಂತೆ ಮಾಡಿದನು. ಆ ಬಳಿಕ
ಮನ್ನದ ಮೂಲಕ ನಿಮ್ಮ ಹಸಿವೆಯನ್ನು ನೀಗಿದನು. ಇದರ
ವಿಷಯವಾಗಿ ನೀವು ಹಿಂದೆಂದೂ ಕೇಳಿರಲಿಲ್ಲ. ನಿಮ್ಮ
ಪೂರ್ವಿಕರೂ ನೋಡಿರಲಿಲ್ಲ. ಆತನು ಹೀಗೇಕೆ ಮಾಡಿ
ದನು? ಯಾಕಂದರೆ ಕೇವಲ ರೊಟ್ಟಿ ತಿಂದ ಮಾತ್ರದಿಂದ
ಮನುಷ್ಯರು ಬದುಕದೆ ದೇವರ ಬಾಯಿಂದ ಹೊರಡುವ
ಮಾತುಗಳಿಂದಲೇ ಬದುಕುವರೆಂಬುದನ್ನು ನೀವು
ತಿಳಿಯಬೇಕೆಂದು ಹೀಗೆ ಮಾಡಿದನು. [4]ಆತನು ನಿಮ್ಮನ್ನು
ಕಾಪಾಡಿ ಸಂರಕ್ಷಿಸಿದ್ದರಿಂದ ಈ ನಲವತ್ತು ವರ್ಷ ನಿಮ್ಮ
ಬಟ್ಟೆಗಳು ಹರಿದುಹೋಗಲಿಲ್ಲ. ನಿಮ್ಮ ಕಾಲುಗಳು ಊದಿ
ಕೊಳ್ಳಲಿಲ್ಲ. [5]ಇವೆಲ್ಲವನ್ನು ನಿಮ್ಮ ದೇವರಾದ ಯೆಹೋ
ವನು ನಿಮಗೆ ಮಾಡಿದನು. ತಂದೆಯು ತನ್ನ ಮಗನನ್ನು
ತಿದ್ದಿ ಶಿಸ್ತಿನಲ್ಲಿ ನಡೆಸುವಂತೆ ದೇವರು ನಿಮ್ಮೊಂದಿಗೆ
ವರ್ತಿಸಿದನು.

[6]“ಆತನ ಆಜ್ಞೆಗಳಿಗೆ ವಿಧೇಯರಾಗಿರಿ. ಆತನನ್ನು ಅನು
ಸರಿಸಿ ಗೌರವಿಸಿರಿ. [7]ನಿಮ್ಮ ದೇವರಾದ ಯೆಹೋವನು
ಉತ್ತಮವಾದ ದೇಶವನ್ನು ನಿಮಗೆ ಕೊಡುತ್ತಿದ್ದಾನೆ. ಆ
ದೇಶದಲ್ಲಿ ನೀರು ಸಮೃದ್ಧಿಯಾಗಿರುವುದು. ನೀರು
ಕಣಿವೆಗಳಲ್ಲಿಯೂ ಬೆಟ್ಟಗಳಲ್ಲಿಯೂ ನೆಲದ ಮೇಲೆ
ಹರಿದುಬರುವುದು. [8]ಆ ದೇಶವು ಗೋಧಿ, ಜವೆಗೋಧಿ,
ದ್ರಾಕ್ಷಾಲತೆಗಳು, ಅಂಜೂರ, ದಾಳಿಂಬೆ ಮರಗಳಿಂದ
ತುಂಬಿದೆ. ಅಲ್ಲಿ ಎಣ್ಣೆ, ಜೇನುತುಪ್ಪ ಧಾರಾಳವಾಗಿ ಸಿಗು
ವವು. [9]ಅಲ್ಲಿ ನೀವು ಯಥೇಚ್ಛವಾಗಿ ತಿನ್ನುವಿರಿ. ನಿಮಗೆ
ಬೇಕಾದದ್ದೆಲ್ಲಾ ನಿಮಗಿರುವುದು. ಅಲ್ಲಿಯ ಕಲ್ಲುಗಳು
ಕಬ್ಬಿಣದಂತಿವೆ. ಬೆಟ್ಟಗಳಿಂದ ನೀವು ತಾಮ್ರವನ್ನು ಅಗೆದು
ತೆಗೆಯುವಿರಿ. [10]ನಿಮಗೆ ಬೇಕಾದಷ್ಟು ಆಹಾರ ಇರು
ವುದು. ಆಗ ನೀವು ನಿಮಗೆ ಉತ್ತಮ ದೇಶವನ್ನು
ಕೊಟ್ಟಿರುವ ಯೆಹೋವದೇವರನ್ನು ಸ್ತುತಿಸುವಿರಿ.

### ಯೆಹೋವನು ಮಾಡಿದ್ದನ್ನು ಮರೆಯಬೇಡಿರಿ

[11]“ನೀವು ನಿಮ್ಮ ದೇವರಾದ ಯೆಹೋವನನ್ನು ಮರೆತು
ಬಿಡದಂತೆ ಎಚ್ಚರವಾಗಿರಿ. ನಾನು ಕೊಡುವ ವಿಧಿ

ನಿಯಮಗಳಿಗೆ ವಿಧೇಯರಾಗಿರಿ. [12] ಆಗ ನಿಮಗೆ ಸಮೃದ್ಧಿ
ಯಾಗಿ ಆಹಾರವಿರುವುದು. ನೀವು ಒಳ್ಳೆಯ ಮನೆಗಳನ್ನು
ಕಟ್ಟಿಕೊಂಡು ವಾಸಿಸುವಿರಿ. [13] ನಿಮ್ಮ ಹಿಂಡು ವೃದ್ಧಿಯಾಗು
ವುದು. ನಿಮಗೆ ಬೆಳ್ಳಿಬಂಗಾರಗಳು ಹೇರಳವಾಗಿ ದೊರಕು
ವವು ಮತ್ತು ನೀವು ಪ್ರತಿಯೊಂದು ವಿಷಯದಲ್ಲೂ
ಸಮೃದ್ಧಿಯನ್ನು ಕಾಣುವಿರಿ. [14] ಆಗ ನೀವು ಹೆಮ್ಮೆಯಿಂದ
ಸೊಕ್ಕಿನ ಕಣ್ಣುಳ್ಳವರಾಗಿರಬೇಡಿ. ನಿಮ್ಮ ದೇವರಾದ
ಯೆಹೋವನನ್ನು ಮರೆತುಬಿಡಬೇಡಿರಿ. ನೀವು ಈಜಿಪ್ಟಿ
ನಲ್ಲಿ ಗುಲಾಮರಾಗಿದ್ದಾಗ ಆತನು ನಿಮ್ಮನ್ನು ಬಿಡಿಸಿ
ಸ್ವತಂತ್ರರನ್ನಾಗಿ ಮಾಡಿದನು. [15] ಆತನು ನಿಮ್ಮನ್ನು ಭಯಂ
ಕರವಾದ ಆ ಅಡವಿಯಲ್ಲಿ ನಡೆಸಿದನು. ಅಲ್ಲಿ ವಿಷದ
ಹಾವು, ಚೇಳುಗಳು ಇದ್ದವು. ನೆಲವು ಕಾದಿದ್ದು ನೀರು
ಎಲ್ಲಿಯೂ ಸಿಗುತ್ತಿರಲಿಲ್ಲ. ಆದರೆ ನಿಮ್ಮ ದೇವರಾದ
ಯೆಹೋವನು ಬಂಡೆಯೊಳಗಿಂದ ನೀರನ್ನು ನಿಮಗೆ
ಒದಗಿಸಿದನು. [16] ನಿಮ್ಮ ಪೂರ್ವಿಕರು ನೋಡಿಲ್ಲದ ಮನ್ನ
ವನ್ನು ಯೆಹೋವನು ನಿಮಗೆ ಮರುಭೂಮಿಯಲ್ಲಿ
ತಿನ್ನಲು ಕೊಟ್ಟನು. ಯೆಹೋವನು ನಿಮ್ಮನ್ನು ಪರೀಕ್ಷಿ
ಸಿದನು. ನೀವು ಒಳ್ಳೆಯ ಫಲಭರಿತವಾದ ಜೀವಿತವನ್ನು
ನಡೆಸಬೇಕೆಂದು ಯೆಹೋವನು ನಿಮ್ಮನ್ನು ದೀನರನ್ನಾಗಿ
ಮಾಡಿದನು. [17] ‘‘ಇವೆಲ್ಲಾ ನಾವೇ ಸಂಪಾದಿಸಿದ್ದು, ನಮ್ಮ
ಶಕ್ತಿ ಸಾಮರ್ಥ್ಯಗಳಿಂದ ಇವುಗಳನ್ನು ನಾವು ಪಡೆ ದೆವು’
ಎಂದು ನಿಮ್ಮೊಳಗೆ ಅಂದುಕೊಳ್ಳಬೇಡಿ. [18] ನಿಮ್ಮ ದೇವ
ರಾದ ಯೆಹೋವನನ್ನು ಜ್ಞಾಪಕಮಾಡಿಕೊಳ್ಳಿ. ಇವೆಲ್ಲಾ
ಸಂಪಾದಿಸುವುದಕ್ಕೆ ಆತನೇ ನಿಮಗೆ ಶಕ್ತಿ ಕೊಟ್ಟನು
ಎಂಬುದನ್ನು ನೆನಪಿನಲ್ಲಿಟ್ಟುಕೊಳ್ಳಿ. ಯೆಹೋವನು
ನಿಮಗೆ ಹೀಗೆ ಮಾಡುವುದರ ಉದ್ದೇಶವೇನಾಗಿತ್ತು?
ಆತನು ನಿಮ್ಮ ಪೂರ್ವಿಕರಿಗೆ ಮಾಡಿದ ವಾಗ್ದಾನವನ್ನು
ಇಂದು ನೆರವೇರಿಸುತ್ತಿರುವಂತೆ ನೆರವೇರಿಸಬೇಕೆಂಬುದೇ
ಆತನ ಉದ್ದೇಶವಾಗಿತ್ತು.

[19] ‘‘ನಿಮ್ಮ ದೇವರಾದ ಯೆಹೋವನನ್ನು ಮರೆತುಬಿಡ
ಬೇಡಿ. ಅನ್ಯದೇವರುಗಳನ್ನು ಅನುಸರಿಸಬೇಡಿ. ಅವು
ಗಳನ್ನು ಪೂಜಿಸಬೇಡಿ; ಅವುಗಳ ಸೇವೆಮಾಡಬೇಡಿ. ಇಲ್ಲ
ವಾದರೆ ನೀವು ಖಂಡಿತವಾಗಿ ನಾಶವಾಗುವಿರಿ.
[20] ಯೆಹೋವನು ನಿಮಗೋಸ್ಕರ ಇತರ ಜನಾಂಗಗಳನ್ನು
ನಾಶಮಾಡುತ್ತಾನೆ. ನಿಮ್ಮ ದೇವರಾದ ಯೆಹೋವನಿಗೆ
ನೀವು ಕಿವಿಗೊಡದೆ ಅನ್ಯದೇವರುಗಳನ್ನು ಅನುಸರಿಸುವು
ದಾದರೆ ನೀವೂ ಅವರಂತೆ ನಾಶವಾಗುವಿರಿ.

### ಯೆಹೋವನು ಇಸ್ರೇಲರೊಂದಿಗಿರುವನು

9 ‘‘ಇಸ್ರೇಲ್ ಜನರೇ, ಕೇಳಿರಿ. ಈ ದಿನ ನೀವು
ಜೋರ್ಡನ್ ನದಿಯನ್ನು ದಾಟಿ ಆ ದೇಶವನ್ನು
ಪ್ರವೇಶಿಸಿ ನಿಮಗಿಂತ ಬಲಿಷ್ಠವಾದ ಜನಾಂಗವನ್ನು
ಹೊಡೆದೋಡಿಸುವಿರಿ. ಅವರ ಪಟ್ಟಣಗಳು ದೊಡ್ಡ
ದಾಗಿವೆ; ಅದರ ಗೋಡೆಗಳು ಆಕಾಶದಷ್ಟು ಎತ್ತರವಾಗಿವೆ;
[2] ಅಲ್ಲಿಯ ಜನರು ಬಲಿಷ್ಠರಾಗಿದ್ದಾರೆ. ಅನಾಕ್ಯರು ಎತ್ತರ
ವಾಗಿ ಬೆಳೆದವರು ಎಂದು ಆ ದೇಶಕ್ಕೆ ಹೋದ ಗೂಢ
ಚಾರರು ನಿಮಗೆ ತಿಳಿಸಿದ್ದು ನೆನಪಿಲ್ಲವೆ? ‘ಅನಾಕ್ಯರ
ಮುಂದೆ ಯಾರೂ ನಿಲ್ಲಲಾರರು ’ ಎಂದು ಅವರು
ಹೇಳಿದರು. [3] ಆದರೆ ನಿಮ್ಮ ದೇವರಾದ ಯೆಹೋವನು
ನಿಮ್ಮ ಮುಂದೆ ನದಿಯನ್ನು ದಾಟುತ್ತಾನೆಂಬುದು ನಿಮಗೆ
ನಿಶ್ಚಯವಾಗಿ ತಿಳಿದಿರಲಿ. ಆತನು ದಹಿಸುವ ಬೆಂಕಿಯಂತಿ
ದ್ದಾನೆ. ಆತನು ಆ ಜನಾಂಗಗಳನ್ನು ಬೇಗನೆ ನಾಶಪಡಿಸು
ವನು; ನಿಮ್ಮ ಎದುರಿನಲ್ಲಿ ಅವರು ಬಿದ್ದುಹೋಗುವಂತೆ
ಮಾಡುವನು. ಇದು ನೆರವೇರುವುದಾಗಿ ಯೆಹೋವನೇ
ನಿಮಗೆ ವಾಗ್ದಾನ ಮಾಡಿದ್ದಾನೆ.

[4] ‘‘ಅಲ್ಲಿಯ ಜನರನ್ನು ದೇವರಾದ ಯೆಹೋವನು
ಹೊಡೆದೋಡಿಸುವನು. ಆದರೆ ನೀವು ನಿಮ್ಮ ಮನಸ್ಸಿನಲ್ಲಿ,
‘ನಾವು ನೀತಿವಂತರಾಗಿದ್ದುದರಿಂದ ಮತ್ತು ಒಳ್ಳೆಯವ
ರಾಗಿದ್ದುದರಿಂದ ಆತನು ನಮ್ಮನ್ನು ಈ ಒಳ್ಳೆಯ ದೇಶಕ್ಕೆ
ತಂದನು’ ಎಂದು ನೆನಸಿಕೊಳ್ಳಬೇಡಿ. ಅದು ಕಾರಣವಲ್ಲ.
ಅಲ್ಲಿಯ ಜನರು ಬಹು ಕೆಟ್ಟವರಾಗಿದ್ದ ಕಾರಣ
ಯೆಹೋವನು ಅವರನ್ನು ಹೊರಡಿಸಿದನು. [5] ನೀವು
ಉತ್ತಮ ರೀತಿಯಲ್ಲಿ ಜೀವಿಸುವಿರಿ ಎಂದು ದೇವರು
ನಿಮಗೆ ಆ ದೇಶವನ್ನು ಕೊಡುವುದಿಲ್ಲ. ಅವರು ಕೆಟ್ಟದ್ದಾಗಿ
ಜೀವಿಸುತ್ತಿರುವುದರಿಂದ ದೇವರು ಅವರನ್ನು ಹೊರಡಿಸಿ
ನೀವು ಆ ದೇಶವನ್ನು ಅನುಭವಿಸುವಂತೆ ಮಾಡಿದನು;
ಆತನು ನಿಮ್ಮ ಪೂರ್ವಿಕರಾದ ಅಬ್ರಹಾಮನಿಗೆ, ಇಸಾಕ
ನಿಗೆ, ಯಾಕೋಬನಿಗೆ ಕೊಟ್ಟಿರುವ ವಾಗ್ದಾನಗಳನ್ನು ನೆರ
ವೇರಿಸುವುದಕ್ಕಾಗಿ ನಿಮಗೆ ಆ ದೇಶವನ್ನು ಕೊಡುವನು.
[6] ನಿಮ್ಮ ದೇವರಾದ ಯೆಹೋವನು ಆ ಉತ್ತಮವಾದ
ದೇಶವನ್ನು ನಿಮಗೆ ವಾಸಿಸಲು ಕೊಡುವನು. ನೀವು ಒಳ್ಳೆ
ಯವರು ಎಂಬುದಾಗಿ ಅಲ್ಲ. ನಿಜವಾಗಿ ಹೇಳಬೇಕಾದರೆ
ನೀವು ಹಠಮಾರಿಗಳು.

### ಯೆಹೋವನ ಕೋಪವನ್ನು ನೆನಪಿಗೆ ತಂದುಕೊಳ್ಳಿರಿ

[7] ‘‘ನೀವು ಅರಣ್ಯದಲ್ಲಿ ಪ್ರಯಾಣ ಮಾಡುತ್ತಿದ್ದಾಗ
ನಿಮ್ಮ ದೇವರಾದ ಯೆಹೋವನನ್ನು ನೀವು ಸಿಟ್ಟಿಗೆಬ್ಬಿ
ಸಿದ್ದನ್ನು ಮರೆಯಬೇಡಿರಿ. ನೀವು ಈಜಿಪ್ಟ್‌ದೇಶವನ್ನು
ಬಿಟ್ಟುಬಂದಂದಿನಿಂದ ಈ ದಿನದ ತನಕವೂ ಆತನ
ಮಾತನ್ನು ಅನುಸರಿಸಲು ನಿರಾಕರಿಸಿರುವಿರಿ. [8] ನೀವು
ಹೋರೇಬ್ ಬೆಟ್ಟದಲ್ಲಿ (ಸೀನಾಯ್) ಯೆಹೋವನನ್ನು
ಬಹಳ ಸಿಟ್ಟಿಗೆಬ್ಬಿಸಿದ್ದೀರಿ. ಯೆಹೋವನು ನಿಮ್ಮನ್ನು ನಾಶ
ಪಡಿಸುವಷ್ಟು ಕೋಪಗೊಂಡಿದ್ದನು. [9] ನಾನು ಕಲ್ಲಿನ
ಹಲಗೆಗಳನ್ನು ತೆಗೆದುಕೊಂಡು ಬರಲು ಬೆಟ್ಟದ

ಮೇಲೇರಿದ್ದೆನು. ಯೆಹೋವ ದೇವರು ನಿಮ್ಮೊಂದಿಗೆ
ಮಾಡಿಕೊಂಡ ಒಡಂಬಡಿಕೆ ಆ ಹಲಗೆಯ ಮೇಲೆ
ಬರೆಯಲ್ಪಟ್ಟಿತ್ತು. ನಾನು ಆ ಬೆಟ್ಟದ ಮೇಲೆ ನಲವತ್ತು
ದಿವಸ ಹಗಲಿರುಳು ಕಳೆದೆನು. ನಾನು ಅನ್ನವನ್ನಾಗಲೀ
ನೀರನ್ನಾಗಲೀ ತೆಗೆದುಕೊಳ್ಳಲಿಲ್ಲ. [10]ಯೆಹೋವನು ತನ್ನ
ಬೆರಳುಗಳಿಂದ ಕಲ್ಲಿನ ಹಲಗೆಗಳ ಮೇಲೆ ಆಜ್ಞೆಗಳನ್ನು
ಬರೆದು ನನಗೆ ಕೊಟ್ಟನು. ನೀವು ಸೀನಾಯ್ ಬೆಟ್ಟದ
ಬಳಿ ಸಮೂಹವಾಗಿ ಸೇರಿಬಂದಿದ್ದಾಗ ಆತನು ಬೆಂಕಿಯ
ಜ್ವಾಲೆಯೊಳಗಿಂದ ನಿಮಗೆ ತಿಳಿಸಿದ ಪ್ರತಿಯೊಂದನ್ನೂ
ಬರೆದಿದ್ದನು.

[11]“ಹಾಗೆ ನಲವತ್ತು ದಿನಗಳ ಅಂತ್ಯದಲ್ಲಿ
ಯೆಹೋವನು ಒಡಂಬಡಿಕೆಯನ್ನು ಬರೆದಿದ್ದ ಆ ಎರಡು
ಕಲ್ಲಿನ ಹಲಗೆಗಳನ್ನು ನನಗೆ ಕೊಟ್ಟನು. [12]ಆಗ ಆತನು
ನನಗೆ, ‘ಎದ್ದು ಬೇಗನೆ ಕೆಳಗಿಳಿ. ನೀನು ಈಜಿಪ್ಟಿನಿಂದ
ಬಿಡಿಸಿತಂದ ಜನರು ತಮ್ಮನ್ನು ತಾವೇ ಕೆಡಿಸಿಕೊಂಡಿದ್ದಾರೆ.
ಇಷ್ಟು ಬೇಗನೆ ಅವರು ನನ್ನ ಆಜ್ಞೆಗಳನ್ನು ಮೀರಿದ್ದಾರೆ.
ಅವರು ಬಂಗಾರವನ್ನು ಕರಗಿಸಿ ತಮಗಾಗಿ ವಿಗ್ರಹವನ್ನು
ಮಾಡಿಕೊಂಡಿದ್ದಾರೆ’ ಎಂದು ಹೇಳಿದನು.

[13]“ಅಲ್ಲದೆ ಯೆಹೋವನು ನನಗೆ, ‘ನಾನು ಈ ಜನ
ರನ್ನು ಗಮನಿಸುತ್ತಿದ್ದೇನೆ. ಇವರು ತುಂಬಾ ಹಠಮಾರಿ
ಗಳು. [14]ಇವರನ್ನು ನಾನು ಸಂಪೂರ್ಣವಾಗಿ ನಾಶ ಮಾಡು
ತ್ತೇನೆ. ಅವರ ಹೆಸರುಗಳನ್ನು ಯಾರೂ ನೆನಪಿನಲ್ಲಿಟ್ಟು
ಕೊಳ್ಳದಂತೆ ಮಾಡುತ್ತೇನೆ. ಆಮೇಲೆ ನಾನು ನಿನ್ನಿಂದ
ಮಹತ್ತಾದ ಮತ್ತು ಬಲಿಷ್ಠವಾದ ಜನಾಂಗವನ್ನು ನಿರ್ಮಿಸು
ತ್ತೇನೆ’ ಎಂದು ಹೇಳಿದನು.

### ಬಂಗಾರದ ಬಸವ

[15]“ನಾನು ಕೂಡಲೇ ಬೆಟ್ಟದಿಂದ ಹಿಂತಿರುಗಿ ಬಂದೆನು.
ಅದು ಬೆಂಕಿಯಿಂದ ಸುಡುತ್ತಲಿತ್ತು ಮತ್ತು ಒಡಂಬಡಿ
ಕೆಯ ಕಲ್ಲಿನ ಹಲಗೆಗಳು ನನ್ನ ಬಳಿಯಲ್ಲಿ ಇದ್ದವು.
[16]ನಾನು ಕೆಳಗೆ ನೋಡಿದಾಗ ಬಂಗಾರದಿಂದ ಬಸವನನ್ನು
ಮಾಡಿಕೊಂಡು ಯೆಹೋವನ ವಿರುದ್ಧವಾಗಿ ಪಾಪ
ಮಾಡಿದ್ದೀರಿ. ಯೆಹೋವನ ಆಜ್ಞೆಯನ್ನು ಅಷ್ಟು ಬೇಗನೇ
ನೀವು ಉಲ್ಲಂಘಿಸಿದ್ದೀರಿ. [17]ನನ್ನ ಬಳಿಯಲ್ಲಿದ್ದ ಆ ಕಲ್ಲಿನ
ಹಲಗೆಗಳನ್ನು ನಾನು ನೆಲಕ್ಕೆ ಅಪ್ಪಳಿಸಿದೆನು. ನಿಮ್ಮ
ಕಣ್ಣೆದುರಿನಲ್ಲಿ ಅವುಗಳನ್ನು ತುಂಡುತುಂಡಾಗಿ ಮಾಡಿ
ದೆನು. [18]ಆಮೇಲೆ ನಾನು ನಲವತ್ತು ದಿನ ಹಗಲಿರುಳು
ಯೆಹೋವನ ಮುಂದೆ ಬೋರಲ ಬಿದ್ದಿದ್ದೆನು. ನಾನು
ಊಟ ಮಾಡಲಿಲ್ಲ, ನೀರನ್ನು ಕುಡಿಯಲಿಲ್ಲ ಯಾಕಂದರೆ
ನೀವು ಪಾಪ ಮಾಡಿ ಯೆಹೋವನ ದೃಷ್ಟಿಯಲ್ಲಿ ಕೆಟ್ಟದ್ದನ್ನು
ಮಾಡಿದ್ದರಿಂದ ಆತನು ಕೋಪಗೊಂಡಿದ್ದನು.
[19]ಯೆಹೋವನ ಭಯಂಕರ ಕೋಪಕ್ಕೆ ನಾನು
ಹೆದರಿದ್ದೆನು. ನಿಮ್ಮನ್ನು ನಾಶಮಾಡುವಷ್ಟರ ತನಕ ಆತನು
ಕೋಪಗೊಂಡಿದ್ದನು. ಆದರೆ ಆತನು ನನ್ನ ಬಿನ್ನಹಗಳನ್ನು
ಲಾಲಿಸಿದನು. [20]ಯೆಹೋವನು ಆರೋನನನ್ನು ನಾಶ
ಪಡಿಸುವಷ್ಟು ಕೋಪೋದ್ರಿಕ್ತನಾಗಿದ್ದನು. ನಾನು ಅವನಿ
ಗಾಗಿ ಪ್ರಾರ್ಥಿಸಿದೆನು. [21]ನೀವು ಮಾಡಿದ ಬಂಗಾರದ
ಬಸವನನ್ನು ತೆಗೆದುಕೊಂಡು ಚೂರುಚೂರು ಮಾಡಿ,
ಬೆಂಕಿಯಲ್ಲಿ ಸುಟ್ಟುಬಿಟ್ಟೆನು. ಮತ್ತೆ ಅದನ್ನು ಬಡಿದು
ಧೂಳನ್ನಾಗಿ ಮಾಡಿ ಆ ಧೂಳನ್ನು ಬೆಟ್ಟದಿಂದ
ಹರಿಯುತ್ತಿದ್ದ ನದಿಯಲ್ಲಿ ಬಿಟ್ಟೆನು.

### ಇಸ್ರೇಲರನ್ನು ಮನ್ನಿಸಲು ದೇವರಿಗೆ ಮೋಶೆಯ ಬಿನ್ನಹ

[22]“ಅದೇ ಪ್ರಕಾರ ತಬೇರಾ, ಮಸ್ಸಾ ಮತ್ತು ಕಿಬ್ರೋತ್
ಹತಾವಾಗಳಲ್ಲಿಯೂ ನೀವು ಯೆಹೋವನನ್ನು ಸಿಟ್ಟಿ
ಗೆಬ್ಬಿಸಿದ್ದಿರಿ. [23]ಕಾದೇಶ್ ಬರ್ನೇಯದಿಂದ ಹೊರಡಲು
ಆತನು ನಿಮಗೆ ಹೇಳಿದಾಗ ನೀವು ಆತನಿಗೆ ವಿಧೇಯ
ರಾಗಲಿಲ್ಲ. ಆತನು ನಿಮಗೆ, ‘ನೀವು ಬೆಟ್ಟಪ್ರದೇಶವನ್ನು
ಹತ್ತಿಹೋಗಿ ನಾನು ನಿಮಗೆ ಕೊಡುವ ದೇಶವನ್ನು ವಶ
ಪಡಿಸಿಕೊಳ್ಳಿ’ ಎಂದು ಹೇಳಿದಾಗ ನಿಮ್ಮ ದೇವರಾದ
ಯೆಹೋವನಿಗೆ ವಿಧೇಯರಾಗಲಿಲ್ಲ. ನೀವು ಆತನಲ್ಲಿ
ಭರವಸೆ ಇಡಲಿಲ್ಲ. ನೀವು ಆತನ ಆಜ್ಞೆಗೆ ಕಿವಿಗೊಡಲಿಲ್ಲ.
[24]ನಾನು ನಿಮ್ಮನ್ನು ತಿಳಿದಿರುವ ಕಾಲದಿಂದ ನೀವು
ಯೆಹೋವನಿಗೆ ಅವಿಧೇಯರಾಗಿಯೇ ಇದ್ದೀರಿ.

[25]“ನಾನು ಯೆಹೋವನ ಮುಂದೆ ನಲವತ್ತು ಹಗಲು
ರಾತ್ರಿ ಬೋರಲುಬಿದ್ದು ಆತನು ನಾಶ ಮಾಡಲಿಕ್ಕಿದ್ದ
ನಿಮಗಾಗಿ ಪ್ರಾರ್ಥಿಸಿದೆನು. [26]‘ನನ್ನ ಒಡೆಯನೇ,
ಯೆಹೋವನೇ, ನಿನ್ನ ಜನರನ್ನು ನೀನು ನಾಶಮಾಡ
ಬೇಡ. ಅವರು ನಿನ್ನ ಜನಾಂಗ. ನಿನ್ನ ಪರಾಕ್ರಮದಿಂದ
ನೀನು ಈಜಿಪ್ಟಿನಿಂದ ಅವರನ್ನು ಬಿಡಿಸಿ ಹೊರತಂದಿರುವೆ.
[27]ಯೆಹೋವನೇ, ನೀನು ಅಬ್ರಹಾಮನಿಗೆ, ಇಸಾಕನಿಗೆ,
ಯಾಕೋಬನಿಗೆ ಮಾಡಿದ ವಾಗ್ದಾನವನ್ನು ನಿನ್ನ ನೆನಪಿಗೆ
ತಂದುಕೋ. ಇವರು ಎಷ್ಟು ಹಠಮಾರಿಗಳೆಂಬುದನ್ನು
ಮರೆತುಬಿಡು. ಅವರ ಪಾಪಮಾರ್ಗವನ್ನಾಗಲೀ, ಪಾಪ
ಗಳನ್ನಾಗಲೀ ನೋಡಬೇಡ. [28]ನೀನು ಇವರಿಗೆ ಶಿಕ್ಷೆ
ಕೊಟ್ಟರೆ ಈಜಿಪ್ಟಿನವರು, ‘ದೇವರು ತನ್ನ ಜನರನ್ನು ತಾನು
ವಾಗ್ದಾನ ಮಾಡಿದ ದೇಶಕ್ಕೆ ನಡೆಸಲು ಅಸಮರ್ಥ
ನಾದನು. ಆತನು ಅವರನ್ನು ದ್ವೇಷಿಸುತ್ತಾನೆ; ಆದುದ
ರಿಂದ ಅವರನ್ನು ಮರುಭೂಮಿಯಲ್ಲಿ ಹತಮಾಡಲು
ಕೊಂಡೊಯ್ದಿದ್ದಾನೆ’ ಎಂದು ಹೇಳುವರು. [29]ಆದರೆ
ಅವರು ನಿನ್ನ ಜನರಾಗಿದ್ದಾರೆ. ಅವರು ನಿನಗೆ ಸಂಬಂಧ
ಪಟ್ಟವರಾಗಿದ್ದಾರೆ; ನಿನ್ನ ಬಲಪರಾಕ್ರಮದಿಂದ ಅವರನ್ನು
ದಾಸತ್ವದಿಂದ ಬಿಡುಗಡೆ ಮಾಡಿರುವೆ.”

### ಹೊಸ ಕಲ್ಲಿನ ಹಲಗೆಗಳು

10 ಆಗ ಯೆಹೋವನು ನನಗೆ, ‘ ಮೊದಲಿನ ಎರಡು
ಕಲ್ಲಿನ ಹಲಗೆಗಳಂತೆಯೇ ಎರಡು ಕಲ್ಲಿನ ಹಲಗೆ
ಗಳನ್ನು ಮಾಡು. ಆಮೇಲೆ ಬೆಟ್ಟದ ಮೇಲೆ ನನ್ನ ಬಳಿಗೆ
ಬಾ. ಅಲ್ಲದೆ ಒಂದು ಮರದ ಪೆಟ್ಟಿಗೆಯನ್ನೂ ತಯಾರು
ಮಾಡು. 2 ನೀನು ಒಡೆದುಹಾಕಿದ ಮೊದಲಿನ ಕಲ್ಲು
ಹಲಗೆಗಳ ಮೇಲೆ ಯಾವ ಪದಗಳನ್ನು ಬರೆದಿದ್ದೆನೊ
ಅದೇ ಪದಗಳನ್ನು ಈ ಕಲ್ಲಿನ ಹಲಗೆಗಳ ಮೇಲೆ ಬರೆ
ಯುತ್ತೇನೆ. ಈ ಹೊಸ ಕಲ್ಲಿನ ಹಲಗೆಗಳನ್ನು ನೀನು
ಮರದ ಪೆಟ್ಟಿಗೆಯಲ್ಲಿಡಬೇಕು’ ಎಂದು ಹೇಳಿದನು.
3 ‘‘ನಾನು ಜಾಲಿಮರದಿಂದ ಪೆಟ್ಟಿಗೆಯನ್ನು ಮಾಡಿ
ದೆನು. ಎರಡು ಕಲ್ಲಿನ ಹಲಗೆಗಳನ್ನು ತಯಾರಿಸಿ ಬೆಟ್ಟ
ವನ್ನೇರಿದೆನು. 4 ಆಗ ಯೆಹೋವನು ಮುಂಚಿನಂತೆಯೇ
ಇದರಲ್ಲೂ ದಶಾಜ್ಞೆಗಳನ್ನು ಬರೆದು ನನಗೆ ಕೊಟ್ಟನು.
ನೀವು ಬೆಟ್ಟದ ಬಳಿ ಒಟ್ಟಾಗಿ ಸೇರಿಬಂದಿದ್ದಾಗ ಆತನು
ಬೆಂಕಿಯೊಳಗಿಂದ ಹೇಳಿದ್ದ ದಶಾಜ್ಞೆಗಳೇ ಇವು. 5 ನಾನು
ಬೆಟ್ಟದಿಂದಿಳಿದು ಆ ಕಲ್ಲಿನ ಹಲಗೆಗಳನ್ನು ಯೆಹೋವನ
ಅಪ್ಪಣೆಯಂತೆ ನಾನು ಮಾಡಿದ ಪೆಟ್ಟಿಗೆಯೊಳಗಿಟ್ಟೆನು. ಆ
ಕಲ್ಲಿನ ಹಲಗೆಗಳು ಈಗಲೂ ಇವೆ.’’
6 ಇಸ್ರೇಲರು ಯಾಕಾನ್ಯರ ಬಾವಿಗಳ ಬಳಿಯಿಂದ
ಪ್ರಯಾಣಮಾಡಿ ಮೋಸೇರಕ್ಕೆ ಬಂದರು. ಆರೋನನು
ಸತ್ತುಹೋದದ್ದು ಮತ್ತು ಅವನ ಶವವನ್ನು ಹೂಳಿಟ್ಟದ್ದು
ಅಲ್ಲಿಯೇ. ಆರೋನನ ಬದಲಿಗೆ ಅವನ ಮಗನಾದ
ಎಲ್ಲಾಜಾರನು ಯಾಜಕನಾದನು. 7 ಆಮೇಲೆ ಇಸ್ರೇಲ್
ಜನರು ಮೋಸೇರದಿಂದ ಗುದ್ಗೋದ ಎಂಬ ಸ್ಥಳಕ್ಕೆ
ಬಂದರು. ಆಮೇಲೆ ಗುದ್ಗೋದದಿಂದ ಯೊಟ್ಬಾತ ಎಂಬ
ನದಿಗಳುಳ್ಳ ಸ್ಥಳದಲ್ಲಿ ಪಾಳೆಯ ಮಾಡಿದರು. 8 ಆ
ಸಮಯದಲ್ಲಿ ಯೆಹೋವನು ಲೇವಿಕುಲದವರನ್ನು
ಒಂದು ವಿಶೇಷವಾದ ಕೆಲಸಕ್ಕಾಗಿ ಬೇರೆ ಕುಲಗಳವರಿಂದ
ಪ್ರತ್ಯೇಕಿಸಿದನು. ಅವರಿಗೆ ಯೆಹೋವನ ಒಡಂಬಡಿಕೆಯ
ಪೆಟ್ಟಿಗೆಯನ್ನು ಎತ್ತಿಕೊಂಡು ಹೋಗುವ ಕೆಲಸ ಕೊಡಲ್ಪ
ಟ್ಟಿತು. ಯೆಹೋವನ ಸನ್ನಿಧಾನದಲ್ಲಿ ಅವರು ಯಾಜಕರ
ಕೆಲಸವನ್ನು ಮಾಡಿದರು. ಅಲ್ಲದೆ ಯೆಹೋವನ ಜನರಿಗೆ
ದೇವರ ಆಶೀರ್ವಾದ ವಚನಗಳನ್ನು ಹೇಳುವ ಕೆಲಸವನ್ನು
ಅವರು ಮಾಡಿದರು. 9 ಹೀಗಿದ್ದುದರಿಂದ ಅವರಿಗೆ ತಮ್ಮ
ಸಹೋದರರ ಜೊತೆಯಲ್ಲಿ ವಾಗ್ದಾನದ ದೇಶದೊಳಗೆ
ಸ್ವಾಸ್ತ್ಯವು ದೊರಕಲಿಲ್ಲ. ಅವರ ಸ್ವಾಸ್ತ್ಯವು ಯೆಹೋವನೇ
ಆಗಿದ್ದನು. ಇದು ದೇವರಾದ ಯೆಹೋವನ ವಾಗ್ದಾನ .
10 ‘‘ಹಿಂದಿನ ಪ್ರಕಾರ ಈ ಸಾರಿಯೂ ನಾನು ನಲವತ್ತು
ದಿನ ಹಗಲಿರುಳು ಪರ್ವತದ ಮೇಲಿದ್ದೆನು. ನನ್ನ ಮಾತು
ಗಳನ್ನು ಯೆಹೋವನು ಆಲೈಸಿದನು; ನಿಮ್ಮನ್ನು ನಾಶ
ಮಾಡುವುದಿಲ್ಲವೆಂದು ಪ್ರಮಾಣ ಮಾಡಿದನು.
11 ಯೆಹೋವನು ನನಗೆ, ‘ನನ್ನ ಜನರನ್ನು ಪ್ರಯಾಣದಲ್ಲಿ
ಮುನ್ನಡೆಸು; ನಾನು ಅವರ ಪೂರ್ವಿಕರಿಗೆ ವಾಗ್ದಾನ
ಮಾಡಿದ ಆ ದೇಶದಲ್ಲಿ ಅವರು ನೆಲೆಸಬೇಕು’ ಎಂದು
ಹೇಳಿದನು.

### ಯೆಹೋವನು ಅಪೇಕ್ಷಿಸುವುದೇನೆಂದರೆ

12 ‘‘ಇಸ್ರೇಲ್ ಜನರೇ, ಕೇಳಿರಿ! ನಿಮ್ಮ ದೇವರಾದ
ಯೆಹೋವನು ನಿಮ್ಮಿಂದ ನಿಜವಾಗಿಯೂ ಅಪೇಕ್ಷಿಸುವು
ದೇನು? ನೀವು ಆತನನ್ನು ಗೌರವಿಸಬೇಕೆಂದೂ ಆತನ
ಆಜ್ಞೆಗಳಿಗೆ ವಿಧೇಯರಾಗಬೇಕೆಂದೂ ಅಪೇಕ್ಷಿಸುತ್ತಾನೆ.
ನೀವು ಆತನನ್ನು ಪ್ರೀತಿಸಿ, ನಿಮ್ಮ ಪೂರ್ಣಹೃದಯ
ದಿಂದಲೂ ಪೂರ್ಣಆತ್ಮದಿಂದಲೂ ಆತನ ಸೇವೆ ಮಾಡ
ಬೇಕೆಂದು ಆತನು ಅಪೇಕ್ಷಿಸುತ್ತಾನೆ. 13 ಆದುದರಿಂದ
ನಾನು ನಿಮಗೆ ಕೊಡುವ ಆತನ ಕಟ್ಟಳೆ, ವಿಧಿನಿಯಮ
ಗಳಿಗೆ ವಿಧೇಯರಾಗಿರಿ. ಇವೆಲ್ಲವೂ ನಿಮ್ಮ ಒಳ್ಳೆಯದ
ಕ್ಕಾಗಿಯೇ ಇರುತ್ತದೆ.
14 ‘‘ಪ್ರತಿಯೊಂದೂ ಯೆಹೋವನದೇ. ಉನ್ನತವಾದ
ಆಕಾಶವೂ ಯೆಹೋವನದೇ. ಈ ಭೂಮಿಯೂ, ಅದರ
ಲ್ಲಿರುವ ಸಮಸ್ತವೂ ದೇವರಿಗೇ ಸೇರಿದ್ದು.
15 ಯೆಹೋವನು ನಿಮ್ಮ ಪೂರ್ವಿಕರನ್ನು ಎಷ್ಟು ಪ್ರೀತಿ
ಮಾಡಿದ್ದನೆಂದರೆ, ಅವರ ಸಂತಾನದವರಾದ ನಿಮ್ಮನ್ನು
ತನ್ನ ಜನರನ್ನಾಗಿ ಆರಿಸಿಕೊಳ್ಳುವಷ್ಟು ಪ್ರೀತಿಸಿದನು; ಬೇರೆ
ಜನಾಂಗದವರ ಬದಲಾಗಿ ನಿಮ್ಮನ್ನೇ ಆರಿಸಿಕೊಂಡನು.
ನೀವು ಇಂದಿಗೂ ಆತನಿಂದ ಆರಿಸಲ್ಪಟ್ಟ ಜನರಾಗಿದ್ದೀರಿ.
16 ‘‘ಆದುದರಿಂದ ಹಠಮಾರಿಗಳಾಗಬೇಡಿರಿ. ನಿಮ್ಮ
ಹೃದಯಗಳನ್ನು ಯೆಹೋವನಿಗೆ ಕೊಡಿರಿ.
17 ಯಾಕಂದರೆ ಯೆಹೋವನೇ ನಿಮ್ಮ ದೇವರು. ಆತನು
ದೇವರುಗಳ ದೇವರೂ ಪ್ರಭುಗಳ ಪ್ರಭುವೂ ಆಗಿದ್ದಾನೆ.
ಆತನು ಮಹಾದೇವರಾಗಿದ್ದಾನೆ. ಆತನು ಆಶ್ಚರ್ಯಕರ
ವಾಗಿದ್ದಾನೆ ಮತ್ತು ಪರಾಕ್ರಮಶಾಲಿಯಾಗಿದ್ದಾನೆ.
ಹೋರಾಟಗಾರ. ಆತನಿಗೆ ಎಲ್ಲಾ ಜನರೂ ಒಂದೇ.
ಆತನು ತನ್ನ ತೀರ್ಮಾನವನ್ನು ಬದಲಾಯಿಸಲು ಲಂಚ
ಸ್ವೀಕರಿಸುವವನಲ್ಲ. 18 ಅನಾಥಮಕ್ಕಳಿಗೂ ವಿಧವೆಯ
ರಿಗೂ ಆತನು ಸಹಾಯಕನಾಗಿದ್ದಾನೆ. ನಮ್ಮ ದೇಶದಲ್ಲಿ
ರುವ ಪರದೇಶಿಯರನ್ನೂ ಆತನು ಪ್ರೀತಿಸುತ್ತಾನೆ; ಅವ
ರಿಗೆ ಊಟ ಬಟ್ಟೆಗಳನ್ನು ಒದಗಿಸುತ್ತಾನೆ. 19 ಆದುದರಿಂದ
ನೀವೂ ಪರದೇಶಿಯರನ್ನು ಪ್ರೀತಿಸಬೇಕು. ನೀವು ಸಹ
ಈಜಿಪ್ಟ್ ದೇಶದಲ್ಲಿ ಪರದೇಶಿಗಳಾಗಿದ್ದಿರಿ.
20 ‘‘ನೀವು ನಿಮ್ಮ ದೇವರಾದ ಯೆಹೋವನನ್ನು
ಗೌರವಿಸಿ ಆತನೊಬ್ಬನನ್ನೇ ಆರಾಧಿಸಬೇಕು. ಆತನನ್ನು
ಬಿಟ್ಟು ತೊಲಗದಿರಿ. ವಾಗ್ದಾನ, ಒಡಂಬಡಿಕೆಗಳನ್ನು
ಮಾಡುವಾಗ ಆತನ ಹೆಸರಿನಲ್ಲಿಯೇ ಮಾಡಿರಿ.

21 ಯೆಹೋವನನ್ನು ಮಾತ್ರ ನೀವು ಸ್ತುತಿಸಬೇಕು. ಆತನೇ
ನಿಮ್ಮ ದೇವರು. ಆತನು ನಿಮಗಾಗಿ ಆಶ್ಚರ್ಯಕರವಾದ
ಕಾರ್ಯಗಳನ್ನು ಮಾಡಿದ್ದಾನೆ. ಅವುಗಳನ್ನು ನೀವು
ಕಣ್ಣಾರೆ ಕಂಡಿದ್ದೀರಿ. 22 ನಿಮ್ಮ ಪೂರ್ವಿಕರು ಈಜಿಪ್ಟಿಗೆ
ಹೋದಾಗ ಅವರಲ್ಲಿ ಕೇವಲ ಎಪ್ಪತ್ತು ಮಂದಿ ಮಾತ್ರ
ಇದ್ದರು. ಆದರೆ ನಿಮ್ಮ ದೇವರಾದ ಯೆಹೋವನು ಆಕಾಶ
ದಲ್ಲಿರುವ ನಕ್ಷತ್ರಗಳಂತೆ ನಿಮ್ಮನ್ನು ಅನೇಕಾನೇಕ
ಜನರನ್ನಾಗಿ ಮಾಡಿದ್ದಾನೆ.

### ಯೆಹೋವನನ್ನು ಸ್ಮರಿಸಿರಿ

11 ‘‘ನಿಮ್ಮ ದೇವರಾದ ಯೆಹೋವನನ್ನು ಪ್ರೀತಿಸಿರಿ.
ಆತನು ಹೇಳಿದವುಗಳನ್ನೆಲ್ಲ ಮಾಡಿರಿ. ನೀವು
ಕಟ್ಟಳೆಗಳಿಗೆ, ನಿಯಮಗಳಿಗೆ ಮತ್ತು ಆಜ್ಞೆಗಳಿಗೆ ಯಾವಾ
ಗಲೂ ವಿಧೇಯರಾಗಿರಬೇಕು. 2 ನಿಮಗೆ ಉಪದೇಶ
ಮಾಡುವುದಕ್ಕಾಗಿ ನಿಮ್ಮ ದೇವರಾದ ಯೆಹೋವನು
ಮಾಡಿದ ಮಹತ್ಕಾರ್ಯಗಳನ್ನು ನೆನಪುಮಾಡಿರಿ. ಆತನ
ಕಾರ್ಯಗಳನ್ನು ನೋಡಿದವರು ನೀವೇ ಹೊರತು ನಿಮ್ಮ
ಮಕ್ಕಳಲ್ಲ: ಆತನು ಎಂಥಾ ಶಕ್ತಿಶಾಲಿ ಎಂದು ನೀವು
ತಿಳಿದಿದ್ದೀರಿ. 3 ನಿಮ್ಮ ಮಕ್ಕಳಲ್ಲ, ನೀವು ಆತನು ಮಾಡಿದ
ಮಹತ್ಕಾರ್ಯಗಳನ್ನು ನೋಡಿದವರು. ಈಜಿಪ್ಟಿನಲ್ಲಿ
ಫರೋಹನಿಗೂ ಅವನ ಸಮಸ್ತ ಪ್ರಜೆಗಳಿಗೂ ಮಾಡಿ
ದ್ದನ್ನು ನೀವು ನೋಡಿದ್ದೀರಿ. 4 ನಿಮ್ಮ ಮಕ್ಕಳಲ್ಲ, ನೀವು
ಈಜಿಪ್ಟಿನ ಸೈನಿಕರನ್ನು ಅವರ ಕುದುರೆ ರಥಗಳಿಗೂ ಮಾಡಿ
ದ್ದನ್ನು ನೋಡಿದವರು. ಅವರು ನಿಮ್ಮನ್ನು ಓಡಿಸಿಕೊಂಡು
ಬರುತ್ತಿದ್ದರು. ಆದರೆ ಯೆಹೋವನು ಅವರನ್ನು ಸಮು
ದ್ರದ ನೀರಿನಲ್ಲಿ ಮುಳುಗಿ ಹೋಗುವಂತೆ ಮಾಡಿದು
ದ್ದನ್ನು ನೋಡಿದ್ದೀರಿ, ಮತ್ತು ಅವರು ಸಂಪೂರ್ಣವಾಗಿ
ನಾಶವಾಗುವುದನ್ನು ನೋಡಿದ್ದೀರಿ. 5 ನೀವು ಈ ಸ್ಥಳಕ್ಕೆ
ಬರುವತನಕ ನಿಮ್ಮ ದೇವರಾದ ಯೆಹೋವನು ನಿಮ
ಗೋಸ್ಕರ ಮರುಭೂಮಿಯಲ್ಲಿ ಮಾಡಿದ ಎಲ್ಲಾ ಅದ್ಭುತ
ಕಾರ್ಯಗಳನ್ನು ನೋಡಿದವರು, ನೀವೇ ಹೊರತು ನಿಮ್ಮ
ಮಕ್ಕಳಲ್ಲ. 6 ರೂಬೇನ್ ಕುಲದ ಎಲೀಯಾಬನ ಮಕ್ಕ
ಳಾದ ದಾತಾನನಿಗೆ ಮತ್ತು ಅಬೀರಾಮನಿಗೆ
ಯೆಹೋವನು ಮಾಡಿದ್ದನ್ನು ನೀವೇ ನೋಡಿದ್ದೀರಿ.
ನಿಮ್ಮ ಕಣ್ಣಮುಂದೆಯೇ ಭೂಮಿಯು ಬಾಯಿತೆರೆದು
ಅವರನ್ನು, ಅವರ ಹೆಂಡತಿ ಮಕ್ಕಳನ್ನು, ಅವರ ಗುಡಾರ
ವನ್ನು ಸೇವಕರನ್ನು ಅವರ ಪಶುಗಳನ್ನು ನುಂಗಿದ್ದನ್ನು
ನೋಡಿದವರು ನೀವೇ ಹೊರತು ನಿಮ್ಮ ಮಕ್ಕಳಲ್ಲ.
7 ಆತನು ಮಾಡಿದ ಎಲ್ಲಾ ಮಹಾಕೃತ್ಯಗಳನ್ನು
ನೋಡಿದವರು ನೀವೇ.

8 ‘‘ಆದುದರಿಂದ ನಾನು ನಿಮಗೆ ‘ನೀವು ಎಲ್ಲಾ ಕಟ್ಟಳೆ
ಗಳಿಗೆ ವಿಧೇಯರಾಗಿ ನಡೆಯಬೇಕು; ಆಗ ನೀವು
ಬಲವನ್ನು ಹೊಂದುವಿರಿ; ಜೋರ್ಡನ್ ನದಿಯನ್ನು
ದಾಟಿ ದೇವರು ನಿಮಗೆ ಕೊಟ್ಟಿರುವ ದೇಶವನ್ನು ಸ್ವಾಧೀನ
ಪಡಿಸಿಕೊಳ್ಳುವಿರಿ. 9 ಆ ದೇಶದಲ್ಲಿ ನೀವು ಬಹುಕಾಲ
ಬಾಳುವಿರಿ. ಆ ದೇಶವು ಎಲ್ಲಾ ಒಳ್ಳೆಯ ವಸ್ತುಗಳಿಂದ
ತುಂಬಿದೆ. ಆ ದೇಶವನ್ನು ನಿಮ್ಮ ಪೂರ್ವಿಕರಿಗೆ ಕೊಡುವು
ದಾಗಿ ದೇವರು ವಾಗ್ದಾನ ಮಾಡಿದ್ದಾನೆ. 10 ನಿಮಗೆ
ದೊರಕಲಿರುವ ದೇಶವು ನೀವು ಹೊರಟುಬಂದ
ಈಜಿಪ್ಟ್ ದೇಶದಂತಿಲ್ಲ. ಈಜಿಪ್ಟಿನಲ್ಲಿ ನೀವು ಬಿತ್ತನೆ
ಮಾಡಿದ ಮೇಲೆ ನೀರನ್ನು ಹಾಯಿಸಲು ನಿಮ್ಮ ಕಾಲು
ಗಳನ್ನು ಬಳಸುತ್ತಿದ್ದಿರಿ. ನಿಮ್ಮ ತರಕಾರಿ ತೋಟಗಳಿಗೆ
ನೀರು ಹಾಯಿಸುವಂತೆಯೇ ನಿಮ್ಮ ಗದ್ದೆಗಳಿಗೂ ನೀರನ್ನು
ಹಾಯಿಸುತ್ತಿದ್ದಿರಿ. 11 ನಿಮಗೆ ಶೀಘ್ರದಲ್ಲಿಯೇ ದೊರಕ
ಲಿರುವ ಭೂಮಿಯಲ್ಲಿ ಹಾಗಲ್ಲ. ಅದು ಬೆಟ್ಟ ತಗ್ಗುಗಳ
ಪ್ರಾಂತ್ಯ; ಮಳೆಯ ನೀರು ಭೂಮಿಯನ್ನು ತೊಯಿ
ಸುತ್ತದೆ. 12 ನಿಮ್ಮ ದೇವರಾದ ಯೆಹೋವನು ಆ ಭೂಮಿ
ಯನ್ನು ಕಾಯುತ್ತಾನೆ. ಆ ದೇಶವನ್ನು ವರ್ಷದ ಮೊದ
ಲಿಂದ ಕೊನೆಯ ತನಕ ಪರಿಪಾಲಿಸುತ್ತಾನೆ.

13 ‘‘ಯೆಹೋವನು ಇಂತೆನ್ನುತ್ತಾನೆ: ‘ಇಂದು ನಾನು
ನಿಮಗೆ ಕೊಟ್ಟ ಆಜ್ಞೆಗಳನ್ನೆಲ್ಲ ಗಮನವಿಟ್ಟು ಕೇಳಿರಿ: ನಿಮ್ಮ
ದೇವರಾದ ಯೆಹೋವನನ್ನು ಪ್ರೀತಿಸಿ, ನಿಮ್ಮ ಪೂರ್ಣ
ಹೃದಯದಿಂದಲೂ ಪೂರ್ಣ ಆತ್ಮದಿಂದಲೂ ಆತನ ಸೇವೆ
ಮಾಡಬೇಕು. ಹೀಗೆ ಮಾಡಿದರೆ 14 ಕಾಲ ಕಾಲಕ್ಕೆ ಸರಿ
ಯಾಗಿ ನಿಮ್ಮ ದೇಶಕ್ಕೆ ನಾನು ಮಳೆಯನ್ನು ಕಳುಹಿಸು
ತ್ತೇನೆ. ಹಿಂಗಾರು, ಮುಂಗಾರು ಮಳೆ ತಕ್ಕ ಸಮಯದಲ್ಲಿ
ಬೀಳುವುದು. ಆಗ ನೀವು ನಿಮ್ಮ ಧಾನ್ಯಗಳನ್ನು, ಹೊಸ
ದ್ರಾಕ್ಷಾರಸ ಮತ್ತು ಎಣ್ಣೆಗಳನ್ನು ಶೇಖರಿಸುವಿರಿ. 15 ನಿಮ್ಮ
ಹೊಲಗಳಲ್ಲಿ ಮತ್ತು ನಿಮ್ಮ ಪಶುಗಳಿಗೆ ಹುಲ್ಲು ಹುಲು
ಸಾಗಿ ಬೆಳೆಯುವಂತೆ ಮಾಡುವೆನು. ನಿಮಗೆ ಆಹಾರವು
ಸಮೃದ್ಧಿಕರವಾಗಿರುವುದು.’

16 ‘‘ಆದುದರಿಂದ ಜಾಗರೂಕರಾಗಿರಿ. ಬೇರೆ ದೇವರು
ಗಳನ್ನು ಸೇವೆಮಾಡಿ ಆರಾಧಿಸಬೇಡಿ. 17 ಇಲ್ಲವಾದರೆ,
ಯೆಹೋವನು ನಿಮ್ಮ ಮೇಲೆ ಬಹಳ ಕೋಪಗೊಳ್ಳು
ವನು; ಆಕಾಶವನ್ನು ಮುಚ್ಚಿ ಮಳೆಬೀಳದಂತೆ ಮಾಡು
ವನು. ಆಗ ಹೊಲದಲ್ಲಿ ಧಾನ್ಯ ಬೆಳೆಯುವುದಿಲ್ಲ. ಆಗ
ಆತನು ಕೊಡುವ ಒಳ್ಳೆಯ ದೇಶದಲ್ಲಿಯೇ ಊಟಕ್ಕಿಲ್ಲದೆ
ಸಾಯುವಿರಿ.

18 ‘‘ನಾನು ಹೇಳಿದ ಆಜ್ಞೆಗಳನ್ನು ಯಾವಾಗಲೂ
ಜ್ಞಾಪಕದಲ್ಲಿಡಿರಿ. ಅದನ್ನು ನಿಮ್ಮ ಹೃದಯದಲ್ಲಿಡಿರಿ. ಅವು
ಗಳನ್ನು ಬರೆದು ಕೈಗಳಲ್ಲಿ ಮತ್ತು ಹಣೆಯ ಮೇಲೆ ಕಟ್ಟಿರಿ.
ಇದು ನಿಮಗೆ ಜ್ಞಾಪಕ ಕೊಡುವುದು. 19 ಈ ಕಟ್ಟಳೆಗಳನ್ನು
ನಿಮ್ಮ ಮಕ್ಕಳಿಗೆ ಬೋಧಿಸಿರಿ. ಅವುಗಳ ವಿಷಯವಾಗಿ
ನೀವು ನಿಮ್ಮ ಮನೆಗಳಲ್ಲಿ ಕುಳಿತಿರುವಾಗ, ದಾರಿಯಲ್ಲಿ

ನಡೆಯುತ್ತಿರುವಾಗ, ಮಲಗುವಾಗ, ಏಳುವಾಗ ನೀವು
ಮಾತನಾಡುತ್ತಾ ಇರಬೇಕು. 20ಈ ಕಟ್ಟಳೆಗಳನ್ನು ನಿಮ್ಮ
ಮನೆಯ ಬಾಗಿಲುಗಳ ಮತ್ತು ನಿಲುವುಗಳ ಮತ್ತು
ಹೆಬ್ಬಾಗಿಲುಗಳ ಮೇಲೆ ಬರೆಯಿರಿ. 21ನಿಮ್ಮ ಪೂರ್ವಿಕ
ರಿಗೆ ವಾಗ್ದಾನ ಮಾಡಲ್ಪಟ್ಟ ದೇಶದಲ್ಲಿ ಆಗ ನೀವು ಮತ್ತು
ನಿಮ್ಮ ಮಕ್ಕಳು ಬಹುಕಾಲ ಬಾಳುವಿರಿ. ಆಕಾಶವು ಭೂಮಿ
ಯಿಂದ ಎಷ್ಟು ದೂರವಾಗಿದೆಯೋ ಅಷ್ಟುಕಾಲ ನೀವು
ಬದುಕುವಿರಿ.

22“ಅನುಸರಿಸಬೇಕೆಂದು ಹೇಳುವ ಪ್ರತಿಯೊಂದು
ಕಟ್ಟಳೆಗಳಿಗೆ ವಿಧೇಯರಾಗಿರಿ. ನಿಮ್ಮ ಯೆಹೋವನನ್ನು
ಪ್ರೀತಿಸಿ ಆತನ ಮಾರ್ಗದಲ್ಲಿ ನಡೆದು ಆತನಿಗೆ ನಂಬಿ
ಗಸ್ತರಾಗಿರಿ. 23ಆಗ ನೀವು ಹೋಗುವ ದೇಶದಲ್ಲಿ
ವಾಸಿಸುವ ಜನರನ್ನು ಯೆಹೋವನಾದ ನಾನು ಹೊಡೆ
ದೋಡಿಸುವೆನು. ಆ ಜನಾಂಗ ನಿಮಗಿಂತಲೂ ದೊಡ್ಡದು
ಮತ್ತು ಬಲಿಷ್ಠವಾದದ್ದು. 24ನೀವು ಹೆಜ್ಜೆಯಿಡುವ ಭೂಮಿ
ಯೆಲ್ಲಾ ನಿಮ್ಮದಾಗುವುದು. ದಕ್ಷಿಣದ ಮರುಭೂಮಿ
ಯಿಂದ ಹಿಡಿದು ಉತ್ತರದ ಲೆಬನೋನಿನ ತನಕ, ಪೂರ್ವ
ದಲ್ಲಿರುವ ಯೂಫ್ರೇಟೀಸ್ ನದಿಯಿಂದ ಪಶ್ಚಿಮದ
ಭೂಮಧ್ಯ ಸಮುದ್ರ ತೀರದ ತನಕ ವಿಸ್ತಾರವಾಗಿದೆ.
25ನಿಮ್ಮ ವಿರುದ್ಧವಾಗಿ ಯಾರೂ ನಿಂತುಕೊಳ್ಳಲಾರರು.
ನೀವು ಆಕ್ರಮಿಸಿ ಕೊಳ್ಳುವ ಪ್ರದೇಶದಲ್ಲೆಲ್ಲಾ
ಯೆಹೋವನು ಅಲ್ಲಿಯ ಜನರು ನಿಮಗೆ ಭಯಪಡು
ವಂತೆ ಮಾಡುವನು. ಯೆಹೋವನು ಈ ವಾಗ್ದಾನವನ್ನು
ನಿಮಗೆ ಮೊದಲೇ ಕೊಟ್ಟಿದ್ದಾನೆ.

### ಆಶೀರ್ವಾದ ಅಥವಾ ಶಾಪ: ಇಸ್ರೇಲರ ಆರಿಸುವಿಕೆ

26“ಈ ಹೊತ್ತು ನೀವು ಆಶೀರ್ವಾದವನ್ನಾಗಲೀ ಶಾಪ
ವನ್ನಾಗಲೀ ಆರಿಸಬೇಕು. 27ನಿಮ್ಮ ದೇವರಾದ
ಯೆಹೋವನ ಆಜ್ಞೆಗಳಿಗೆ ನೀವು ವಿಧೇಯರಾದರೆ ಆತ
ನಿಂದ ಆಶೀರ್ವಾದ ಹೊಂದುವಿರಿ. 28ಆದರೆ ನೀವು
ವಿಧೇಯರಾಗದಿದ್ದರೆ ಶಾಪವನ್ನು ಹೊಂದುವಿರಿ. ನಾನು
ನಿಮಗೆ ಕೊಡುವ ಯೆಹೋವನ ನಿಯಮಗಳನ್ನು ಅನು
ಸರಿಸುವುದನ್ನು ನಿಲ್ಲಿಸಬೇಡಿರಿ. ಅನ್ಯದೇವತೆಗಳನ್ನು
ಪೂಜಿಸಬೇಡಿರಿ. ನಾನು ನಿಮಗೆ ಬೋಧಿಸುತ್ತಿರುವುದು
ಯೆಹೋವನ ಮಾರ್ಗದ ಕುರಿತೇ ಹೊರತು ಬೇರೆ
ದೇವರುಗಳ ಕುರಿತಲ್ಲ.

29“ದೇವರಾದ ಯೆಹೋವನು ನಿಮ್ಮನ್ನು ನಿಮ್ಮ
ದೇಶಕ್ಕೆ ನಡೆಸುವನು. ನೀವು ಬೇಗನೆ ಅದನ್ನು ಸ್ವಾಧೀನ
ಮಾಡಿಕೊಳ್ಳುವಿರಿ. ಆ ಸಮಯದಲ್ಲಿ ನೀವು ಗೆರಿಜ್ಜೀಮ್
ಪರ್ವತದ ತುದಿಗೇರಿ ಅಲ್ಲಿಂದ ಆಶೀರ್ವಾದ ವಚನ
ಗಳನ್ನು ನುಡಿಯಿರಿ. ಅನಂತರ ನೀವು ಏಬಾಲ್ ಪರ್ವತದ
ಮೇಲೇರಿ ಅಲ್ಲಿಂದ ಜನರಿಗೆ ಶಾಪವಚನಗಳನ್ನು
ನುಡಿಯಿರಿ. 30ಈ ಬೆಟ್ಟಗಳು ಜೋರ್ಡನ್ ನದಿಯ ಆಚೆ
ದಡದಲ್ಲಿವೆ. ಇವು ಜೋರ್ಡನ್ ಕಣಿವೆಯಲ್ಲಿ ವಾಸವಾಗಿ
ರುವ ಕಾನಾನ್ಯರ ಪ್ರದೇಶದಲ್ಲಿವೆ. ಈ ಬೆಟ್ಟಗಳು ಪಶ್ಚಿಮ
ದಿಕ್ಕಿನಲ್ಲಿವೆ. ಗಿಲ್ಗಾಲ್ ಊರಿನ ಸಮೀಪದಲ್ಲಿರುವ ಓಕ್
ಮರಗಳಿಗೆ ಇವು ದೂರವೇನೂ ಇಲ್ಲ. 31ನೀವು
ಜೋರ್ಡನ್ ನದಿಯನ್ನು ದಾಟಿ, ನಿಮ್ಮ ದೇವರಾದ
ಯೆಹೋವನು ನಿಮಗೆ ಕೊಡುವ ದೇಶವನ್ನು ಸ್ವಾಧೀನ
ಮಾಡಿಕೊಳ್ಳಿರಿ. ಈ ದೇಶವು ನಿಮ್ಮದೇ. 32ಈ ದೇಶದಲ್ಲಿ
ನೀವು ವಾಸಿಸುವಾಗ ನಾನು ಈ ಹೊತ್ತು ನಿಮಗೆ ಕೊಡುವ
ಕಟ್ಟಳೆ ವಿಧಿ ನಿಯಮಗಳನ್ನು ತಪ್ಪದೆ ಪರಿಪಾಲಿಸಬೇಕು.

### ಯೆಹೋವನನ್ನು ಆರಾಧಿಸುವ ಸ್ಥಳ

12 ‘ನಿಮಗೆ ಸಿಗುವ ಹೊಸ ದೇಶದಲ್ಲಿ ಈ ಕಟ್ಟಳೆ
ಗಳನ್ನು ನೀವು ಅನುಸರಿಸಬೇಕು. ನೀವು
ಭೂಮಿಯ ಮೇಲೆ ಜೀವಿಸುವವರೆಗೆ ಆ ಕಟ್ಟಳೆಗಳನ್ನು
ತಪ್ಪದೇ ಅನುಸರಿಸಬೇಕು. ನಮ್ಮ ಯೆಹೋವನು ನಮ್ಮ
ಪೂರ್ವಿಕರ ದೇವರಾಗಿದ್ದಾನೆ. ಆತನೇ ಈ ದೇಶವನ್ನು
ನಿಮಗೆ ಕೊಡುತ್ತಿದ್ದಾನೆ. 2ಈಗ ಆ ಪ್ರಾಂತ್ಯದಲ್ಲಿ ವಾಸಿಸು
ತ್ತಿರುವ ಜನರಿಂದ ತೆಗೆದುಕೊಂಡು ನಿಮಗದನ್ನು ಕೊಡು
ತ್ತಾನೆ. ಅಲ್ಲಿ ನೀವು ಹೋದಾಗ ಆ ಜನರ ವಿಗ್ರಹಾರಾಧ
ನೆಯ ಸ್ಥಳಗಳನ್ನು ಸಂಪೂರ್ಣವಾಗಿ ಹಾಳುಮಾಡಬೇಕು.
ಅವರ ಪೂಜಾಸ್ಥಳಗಳು ಎತ್ತರವಾದ ಬೆಟ್ಟಗುಡ್ಡಗಳ
ಮೇಲೆಯೂ ಹಸುರಾಗಿರುವ ಮರದ ಕೆಳಗೂ ಇರುತ್ತವೆ.
3ನೀವು ಅವರ ಯಜ್ಞವೇದಿಕೆಗಳನ್ನು ಪುಡಿಪುಡಿಮಾಡಿ,
ಅವರ ಸ್ಮಾರಕ ಕಲ್ಲುಗಳನ್ನು ಕೆಡವಬೇಕು. ಅವರ ಅಶೇರು
ಕಂಬಗಳನ್ನು ಸುಟ್ಟುಬಿಡಬೇಕು ಮತ್ತು ದೇವರುಗಳ
ವಿಗ್ರಹಗಳನ್ನು ಕತ್ತರಿಸಿಹಾಕಬೇಕು. ಹೀಗೆ ನೀವು ಅವುಗಳ
ಹೆಸರನ್ನು ಆ ಸ್ಥಳದಿಂದ ನಿರ್ಮೂಲ ಮಾಡಬೇಕು.

4“ಆ ಜನರು ತಮ್ಮ ದೇವರುಗಳನ್ನು ಆರಾಧಿಸುವ
ಪ್ರಕಾರ ನೀವು ನಿಮ್ಮ ದೇವರಾದ ಯೆಹೋವನನ್ನು
ಆರಾಧಿಸಬಾರದು. 5ನಿಮ್ಮ ದೇವರಾದ ಯೆಹೋವನು
ನಿಮ್ಮ ಕುಲದವರ ಪ್ರಾಂತ್ಯಗಳಿಂದ ಒಂದು ವಿಶೇಷ
ಸ್ಥಳವನ್ನು ಆರಿಸಿಕೊಂಡು ಅದಕ್ಕೆ ತನ್ನ ಹೆಸರಿಡುವನು.
ಅಲ್ಲಿ ಆತನ ಆಲಯ ಕಟ್ಟಲ್ಪಡುವುದು. ನೀವು ನನ್ನನ್ನು
ಆರಾಧಿಸಲು ಅಲ್ಲಿಗೆ ಹೋಗಬೇಕು. 6ಅಲ್ಲಿಗೆ ನೀವು
ನಿಮ್ಮ ಸರ್ವಾಂಗಹೋಮಗಳನ್ನು, ಯಜ್ಞಗಳನ್ನು, ನಿಮ್ಮ
ಬೆಳೆಗಳಲ್ಲಿ ಮತ್ತು ಪಶುಗಳಲ್ಲಿ ದಶಾಂಶವನ್ನು, ನಿಮ್ಮ
ವಿಶೇಷ ಕಾಣಿಕೆಗಳನ್ನು, ಯೆಹೋವನಿಗೆ ನೀವು ಹರಕೆ
ಹೊತ್ತುಕೊಂಡ ಯಾವುದೇ ಕಾಣಿಕೆಗಳನ್ನು, ನೀವು
ಕೊಡಲಿಚ್ಛಿಸುವ ಯಾವುದೇ ವಿಶೇಷ ಕಾಣಿಕೆಗಳನ್ನು,
ನಿಮ್ಮ ಮಂದೆ ಮತ್ತು ಹಿಂಡುಗಳ ಚೊಚ್ಚಲುಮರಿಗಳನ್ನು
ತರಬೇಕು. 7ನೀವೂ ಮತ್ತು ನಿಮ್ಮ ಕುಟುಂಬಗಳವರೂ

ಅಲ್ಲಿ ಒಟ್ಟಿಗೆ ಊಟ ಮಾಡಬೇಕು. ನಿಮ್ಮ ದೇವರಾದ
ಯೆಹೋವನು ನಿಮ್ಮೊಂದಿಗಿರುವನು. ನೀವು ದುಡಿದು
ಸಂಪಾದಿಸಿದ ಎಲ್ಲಾ ವಸ್ತುಗಳನ್ನು ಇತರರೊಂದಿಗೆ ಹಂಚಿ
ಕೊಂಡು ಆ ಸ್ಥಳದಲ್ಲಿ ಆನಂದಿಸುವಿರಿ. ನಿಮ್ಮ ದೇವರಾದ
ಯೆಹೋವನು ನಿಮ್ಮನ್ನು ಆಶೀರ್ವದಿಸಿ ಆ ಎಲ್ಲಾ
ಒಳ್ಳೆಯವುಗಳನ್ನು ನಿಮಗೆ ಕೊಟ್ಟನೆಂದು ನೀವು ಜ್ಞಾಪಿಸಿ
ಕೊಳ್ಳುವಿರಿ.

8-9 “ನೀವು ಇನ್ನೂ ವಾಗ್ದಾನದ ದೇಶವನ್ನು ಪ್ರವೇಶಿ
ಸಲಿಲ್ಲದ ಕಾರಣ ನೀವು ಯೆಹೋವನಿಗೆ ನಿಮ್ಮ ಇಷ್ಟ
ಪ್ರಕಾರವಾಗಿ ಆರಾಧನೆ ಮಾಡುತ್ತಿದ್ದೀರಿ. ಆದರೆ ಇದನ್ನೇ
ಮುಂದುವರಿಸಬೇಡಿ. 10 ನೀವು ಜೋರ್ಡನ್ ನದಿಯನ್ನು
ದಾಟಿ, ಯೆಹೋವನು ನಿಮಗೆ ಕೊಡುವ ದೇಶದಲ್ಲಿ ವಾಸಿ
ಸುವಿರಿ. ನಿಮ್ಮ ಎಲ್ಲಾ ವೈರಿಗಳಿಂದ ತಪ್ಪಿಸಿ ದೇವರು ನಿಮಗೆ
ಸಮಾಧಾನವನ್ನು ಅನುಗ್ರಹಿಸುವನು; ನೀವು ಅಲ್ಲಿ
ಸುರಕ್ಷಿತವಾಗಿರುವಿರಿ. 11 ಆಗ ನಿಮ್ಮ ಯೆಹೋವನು ತನ್ನ
ಹೆಸರಿಗಾಗಿ ಒಂದು ಸ್ಥಳವನ್ನು ಆರಿಸಿಕೊಳ್ಳುವನು. ಆ
ಸ್ಥಳಕ್ಕೆ ನೀವು ನಿಮ್ಮ ಸರ್ವಾಂಗಹೋಮಗಳನ್ನು ಮತ್ತು
ಯಜ್ಞಾದಿಗಳನ್ನು ಸಮರ್ಪಿಸಬೇಕು; ನಿಮ್ಮ ಹರಕೆಯ
ಕಾಣಿಕೆಗಳನ್ನು, ಚೊಚ್ಚಲ ಪಶುಗಳನ್ನು, ದಶಾಂಶವನ್ನು
ಸಲ್ಲಿಸಬೇಕು. 12 ಅಲ್ಲಿಗೆ ನಿಮ್ಮ ಹೆಂಡತಿ ಮಕ್ಕಳೊಂದಿಗೆ,
ನಿಮ್ಮ ಸೇವಕರೊಂದಿಗೆ ಮತ್ತು ನಿಮ್ಮ ಪಟ್ಟಣದಲ್ಲಿ
ವಾಸಿಸುವ ಲೇವಿಯರೊಂದಿಗೆ ಹೋಗಿ ಯೆಹೋವನ
ಸಮಕ್ಷಮದಲ್ಲಿ ಸಂತೋಷಪಡಬೇಕು. (ಲೇವಿಕುಲದವ
ರಿಗೆ ಸ್ವಾಸ್ತ್ಯವಿರುವುದಿಲ್ಲ) 13 ನಿಮಗೆ ಇಷ್ಟ ಬಂದ ಸ್ಥಳಗಳಲ್ಲಿ
ನೀವು ಬಲಿಯನ್ನು ಅರ್ಪಿಸದಿರಿ. 14 ಯೆಹೋವನು ತನ್ನ
ವಿಶೇಷವಾದ ಸ್ಥಳವನ್ನು ನಿಮ್ಮ ಕುಲಗಳವರ ಮಧ್ಯದಿಂದ
ಆರಿಸಿಕೊಳ್ಳುವನು. ನಿಮ್ಮ ಸರ್ವಾಂಗಹೋಮಗಳನ್ನು
ಮತ್ತು ನಾನು ನಿಮಗೆ ಹೇಳಿದವುಗಳೆಲ್ಲವನ್ನು ಅದೇ
ಸ್ಥಳದಲ್ಲಿ ಮಾಡಿರಿ.

15 “ನೀವು ನಿಮ್ಮ ಸ್ಥಳಗಳಲ್ಲಿ ವಾಸಿಸುವಾಗ ಅಲ್ಲಿರುವ
ಜಿಂಕೆ, ಟಗರು ಇತ್ಯಾದಿ ಶುದ್ಧ ಪ್ರಾಣಿಗಳನ್ನು ಕೊಂದು
ತಿನ್ನಬಹುದು. ನಿಮ್ಮ ದೇವರಾದ ಯೆಹೋವನು ನಿಮಗೆ
ಕೊಡುವಷ್ಟು ಮಾಂಸದಲ್ಲಿ ಎಷ್ಟು ಬೇಕಾದರೂ ತಿನ್ನಿರಿ.
ಶುದ್ಧರೂ ಅಶುದ್ಧರೂ ಯಾರು ಬೇಕಾದರೂ ಆ ಮಾಂಸ
ವನ್ನು ತಿನ್ನಬಹುದು. 16 ಆದರೆ ಅದರ ರಕ್ತವನ್ನು ಮಾತ್ರ
ತಿನ್ನಬಾರದು. ಅದರ ರಕ್ತವನ್ನು ನೀರಿನಂತೆ ನೆಲದ ಮೇಲೆ
ಚೆಲ್ಲಿಬಿಡಬೇಕು.

17 “ನೀವು ವಾಸಿಸುವ ಆ ಸ್ಥಳದಲ್ಲಿ ಕೆಲವನ್ನು ತಿನ್ನ
ಕೂಡದು. ಅದು ಯಾವುದೆಂದರೆ, ದೇವರಿಗೆ ಮೀಸಲಿಟ್ಟ
ಧಾನ್ಯ, ಹೊಸದ್ರಾಕ್ಷಾರಸ ಮತ್ತು ಎಣ್ಣೆಯ ಪಾಲು; ದೇವ
ರಿಗೆ ಸರ್ಮಪಿಸಲು ಇಟ್ಟಿರುವ ಚೊಚ್ಚಲ ಪಶುಗಳು ಮತ್ತು
ಹಿಂಡಿನ ಮರಿಗಳು, ನೀವು ಹರಕೆ ಹೊತ್ತುಕೊಂಡ
ಕಾಣಿಕೆಗಳು ಮತ್ತು ದೇವರಿಗಾಗಿ ಮೀಸಲಿಟ್ಟಿದ್ದ ವಸ್ತು
ಗಳು ಇವುಗಳಲ್ಲಿ ಯಾವುದನ್ನೂ ನೀವು ನಿಮ್ಮ ವಾಸಸ್ಥಳ
ದಲ್ಲಿ ತಿನ್ನಬಾರದು. 18 ನಿಮ್ಮ ದೇವರಾದ ಯೆಹೋವನು
ಆರಿಸಿಕೊಂಡಿರುವ ಮತ್ತು ಆತನು ನಿಮ್ಮೊಂದಿಗಿರುವ ಆ
ವಿಶೇಷ ಸ್ಥಳದಲ್ಲಿಯೇ ನೀವು ಆ ಕಾಣಿಕೆಗಳನ್ನು ತಿನ್ನ
ಬೇಕು. ನೀವು ಅಲ್ಲಿಗೆ ನಿಮ್ಮ ಗಂಡುಹೆಣ್ಣು ಮಕ್ಕ
ಳೊಂದಿಗೆ, ನಿಮ್ಮ ಎಲ್ಲಾ ಸೇವಕರೊಂದಿಗೆ ಮತ್ತು ನಿಮ್ಮ
ಊರುಗಳಲ್ಲಿ ವಾಸವಾಗಿರುವ ಲೇವಿಯರೊಂದಿಗೆ
ಹೋಗಿ ನಿಮ್ಮ ದೇವರಾದ ಯೆಹೋವನೊಂದಿಗೆ ಆನಂದಿ
ಸಿರಿ; ನೀವು ದುಡಿದು ಸಂಪಾದಿಸಿದವುಗಳನ್ನು ಅನುಭವಿ
ಸಿರಿ. 19 ಆದರೆ ಯಾವಾಗಲೂ ಈ ಊಟವನ್ನು ಲೇವಿಯ
ರೊಂದಿಗೆ ಹಂಚಿ ಕೊಂಡು ತಿನ್ನಬೇಕೆಂಬುದನ್ನು ಜ್ಞಾಪಕ
ದಲ್ಲಿಡಿರಿ. ನೀವು ನಿಮ್ಮ ದೇಶದಲ್ಲಿ ವಾಸಿಸುವಷ್ಟು ಕಾಲ
ಹೀಗೆ ಮಾಡಿರಿ.

20-21 “ನಿಮ್ಮ ದೇವರಾದ ಯೆಹೋವನು ನಿಮ್ಮ ದೇಶ
ವನ್ನು ವಿಸ್ತಾರ ಮಾಡುವನು. ಆ ಸಮಯದಲ್ಲಿ ನೀವು
ಇರುವ ಸ್ಥಳಗಳು ಆತನು ತನ್ನ ಹೆಸರಿಗಾಗಿ ಆರಿಸಿದ ಸ್ಥಳ
ದಿಂದ ತುಂಬಾ ದೂರವಿರಬಹುದು. ಆಗ ನಿಮಗೆ ಮಾಂಸ
ಊಟಮಾಡಲು ಆಶೆಯಾದರೆ ನಿಮ್ಮ ಹಿಂಡಿನಿಂದಾಗಲೀ
ಹಟ್ಟಿಯಿಂದಾಗಲೀ ಪ್ರಾಣಿಯನ್ನು ಕೊಂದು ತಿನ್ನ
ಬಹುದು. ನಾನು ತಿಳಿಸುವ ರೀತಿಯಲ್ಲಿ ತಿನ್ನಿರಿ. ನಿಮಗೆ
ಬೇಕಾದಾಗಲೆಲ್ಲಾ ಹೀಗೆ ಮಾಡಿರಿ. 22 ಜಿಂಕೆಯನ್ನಾಗಲೀ
ಸಾರಂಗವನ್ನಾಗಲೀ ತಿನ್ನುವಂತೆ ನೀವು ಈ ಮಾಂಸವನ್ನು
ತಿನ್ನಬಹುದು. ಶುದ್ಧರಾಗಿರುವವರೂ ಅಶುದ್ಧರಾಗಿರು
ವವರೂ ಈ ಮಾಂಸವನ್ನು ತಿನ್ನಬಹುದು. 23 ಆದರೆ ರಕ್ತ
ವನ್ನು ಮಾತ್ರ ತಿನ್ನಬಾರದು. ಯಾಕಂದರೆ ರಕ್ತವು ಪ್ರಾಣಕ್ಕೆ
ಆಧಾರ. ಮಾಂಸದಲ್ಲಿ ಇನ್ನೂ ಜೀವಕಣಗಳು ಇರುವುದ
ರಿಂದ ರಕ್ತದೊಂದಿಗೆ ಮಾಂಸವನ್ನು ತಿನ್ನಬೇಡಿರಿ. 24 ರಕ್ತ
ವನ್ನು ನೀರಿನಂತೆ ನೆಲದಲ್ಲಿ ಚೆಲ್ಲಿ ಬಿಡಬೇಕು. 25 ಆದುದ
ರಿಂದ ನೀವು ಅದನ್ನು ತಿನ್ನದೆ ಯೆಹೋವನು ನಿಮಗೆ ತಿಳಿಸಿ
ದಂತೆ ಮಾಡಿರಿ. ಆಗ ನಿಮಗೂ ನಿಮ್ಮ ಸಂತತಿಯವರಿಗೂ
ಶುಭ ಉಂಟಾಗುವುದು.

26 “ನೀವು ನಿಮ್ಮ ದೇವರಿಗೆ ವಿಶೇಷ ಕಾಣಿಕೆಗಳನ್ನು
ಸಮರ್ಪಿಸಲು ಇಷ್ಟಪಟ್ಟರೆ ಆಗ ನೀವು ದೇವರಾರಿಸಿರುವ
ಸ್ಥಳಕ್ಕೆ ಹೋಗಿ ಅಲ್ಲಿ ಅದನ್ನು ಸಮರ್ಪಿಸಿರಿ. ನಿಮ್ಮ
ಸರ್ವಾಂಗಹೋಮವನ್ನೂ ಆ ಸ್ಥಳದಲ್ಲಿಯೇ ಸಮರ್ಪಿಸ
ಬೇಕು. 27 ನಿಮ್ಮ ದೇವರಾದ ಯೆಹೋವನ ಯಜ್ಞವೇದಿ
ಕೆಯ ಮೇಲೆ ನಿಮ್ಮ ಸರ್ವಾಂಗಹೋಮದ ಪಶುವಿನ
ಮಾಂಸವನ್ನು ಮತ್ತು ರಕ್ತವನ್ನು ಸಮರ್ಪಿಸಬೇಕು. ನಿಮ್ಮ
ಯಜ್ಞಗಳಲ್ಲಿ ರಕ್ತವನ್ನು ಬಲಿಪೀಠದಲ್ಲಿ ಸುರಿದು ಮಾಂಸ
ವನ್ನು ನೀವು ತಿನ್ನಬಹುದು. 28 ಯೆಹೋವನು ಕೊಡುವ
ಕಟ್ಟಳೆಗಳನ್ನು ನೀವು ಅನುಸರಿಸಿರಿ. ನಿಮ್ಮ ದೇವರಾದ

ಯೆಹೋವನು ಮೆಚ್ಚುವ ಕಾರ್ಯಗಳನ್ನು ನೀವು ಮಾಡುವಾಗ ನಿಮಗೂ ನಿಮ್ಮ ಸಂತತಿಯವರಿಗೂ ಶುಭ ಉಂಟಾಗುವುದು.

29 "ನೀವು ಬೇರೆಯವರ ದೇಶವನ್ನು ವಶಪಡಿಸಿ ಕೊಳ್ಳಲು ಹೋಗುತ್ತಿದ್ದೀರಿ. ನಿಮ್ಮ ದೇವರಾದ ಯೆಹೋವನು ಆ ಜನರನ್ನು ನಿಮಗಾಗಿ ನಾಶಮಾಡು ವನು. ಆ ಜನರನ್ನು ಅಲ್ಲಿಂದ ಹೊಡೆದೋಡಿಸಿ ಅವರ ಸ್ಥಳದಲ್ಲಿ ನೀವು ವಾಸಿಸುವಿರಿ. 30 ಅಲ್ಲಿ ವಾಸಿಸುವ ಅನ್ಯ ಜನರನ್ನು ನೀವು ನಾಶಮಾಡಬೇಕು. ಇಲ್ಲದಿದ್ದಲ್ಲಿ ಅವರು ನಿಮಗೆ ಉರುಲಾಗುವರು; ಅವರ ವಿಗ್ರಹಗಳನ್ನು ಪೂಜಿಸ ದಂತೆ ಎಚ್ಚರಿಕೆಯಿಂದಿರಿ. ಆ ಸುಳ್ಳುದೇವರುಗಳಿಗೆ ಪ್ರಾರ್ಥಿಸಬೇಡಿ, 'ಆ ಜನರು ಆ ಸುಳ್ಳುದೇವರುಗಳನ್ನು ಪೂಜಿಸಿದ ಹಾಗೆ ನಾನು ಮಾಡುವೆನು ಎಂದು ನಿಮ್ಮ ಮನಸ್ಸಿನಲ್ಲಿ ಅಂದುಕೊಳ್ಳಬೇಡಿ!' 31 ನಿಮ್ಮ ದೇವರಾದ ಯೆಹೋವನಿಗೆ ನೀವು ಆ ರೀತಿ ಮಾಡಬಾರದು. ಆ ರೀತಿಯಾಗಿ ಆತನನ್ನು ಆರಾಧಿಸಬಾರದು. ಯಾಕಂದರೆ ಅವರು ತಮ್ಮ ದೇವರೆದುರಿನಲ್ಲಿ ಅಸಹ್ಯವಾದ ಕಾರ್ಯ ಗಳನ್ನು ಮಾಡುತ್ತಾರೆ. ಅದನ್ನು ನಮ್ಮ ದೇವರಾದ ಯೆಹೋವನು ದ್ವೇಷಿಸುತ್ತಾನೆ. ಅವರು ತಮ್ಮ ಮಕ್ಕಳನ್ನೇ ದೇವರಿಗೆ ಬಲಿ ಅರ್ಪಿಸುತ್ತಾರೆ.

32 "ನಾನು ಆಜ್ಞಾಪಿಸಿದ ಪ್ರಕಾರವೇ ನೀವು ಮಾಡಿರಿ. ಅದಕ್ಕೆ ಏನೂ ಕೂಡಿಸಬಾರದು. ಅದರಿಂದ ಏನೂ ತೆಗೆಯಬಾರದು.

### ಸುಳ್ಳುಪ್ರವಾದಿಗಳು

13 "ಒಬ್ಬ ಪ್ರವಾದಿಯಾಗಲೀ ಕನಸಿನ ಅರ್ಥ ಹೇಳು ವವನಾಗಲೀ ನಿಮ್ಮ ಬಳಿಗೆ ಬಂದು ನಿಮಗೊಂದು ಸೂಚಕಕಾರ್ಯವನ್ನಾಗಲೀ ಅದ್ಭುತಕಾರ್ಯವನ್ನಾಗಲೀ ಮಾಡಿತೋರಿಸುತ್ತೇನೆ ಎಂದು ಹೇಳಿದರೂ ಹೇಳ ಬಹುದು. 2 ಅವನು ಅದ್ಭುತಕಾರ್ಯಗಳನ್ನು ಮಾಡಿ ತೋರಿಸಬಹುದು. ಆಮೇಲೆ ಅವನು ನಿಮಗೆ ಗೊತ್ತಿಲ್ಲದ ದೇವರನ್ನು ಅನುಸರಿಸಲು ನಿಮಗೆ ಹೇಳಬಹುದು 3 ಅಂಥಾ ಮನುಷ್ಯರಿಗೆ ಕಿವಿಗೊಡಬೇಡಿ. ದೇವರು ನಿಮ್ಮನ್ನು ಪರೀಕ್ಷೆ ಮಾಡುತ್ತಿದ್ದಾನೆ. ನಿಮ್ಮ ದೇವರಾದ ಯೆಹೋವನನ್ನು ನಿಮ್ಮ ಪೂರ್ಣ ಹೃದಯದಿಂದಲೂ ಪೂರ್ಣ ಆತ್ಮದಿಂದಲೂ ಪ್ರೀತಿಸುತ್ತೀರೊ ಇಲ್ಲವೊ ಎಂದು ನಿಮ್ಮನ್ನು ಪರೀಕ್ಷಿಸುವನು. 4 ನೀವು ನಿಮ್ಮ ದೇವ ರಾದ ಯೆಹೋವನನ್ನು ಅನುಸರಿಸಬೇಕು, ಗೌರವಿಸ ಬೇಕು, ಆತನ ಆಜ್ಞೆಗಳಿಗೆ ವಿಧೇಯರಾಗಬೇಕು. ಆತನು ಹೇಳಿದಂತೆ ನಡೆಯಬೇಕು ಮತ್ತು ಆತನನ್ನು ತೊರೆದು ಬಿಡದೆ ಸೇವಿಸಬೇಕು. 5 ಅಂಥಾ ಪ್ರವಾದಿ ಅಥವಾ ಕನಸಿನ ಅರ್ಥ ಹೇಳುವವನನ್ನು ಕೊಂದುಹಾಕಬೇಕು. ಯಾಕಂದರೆ ಅವನು ಯೆಹೋವನನ್ನು ತೊರೆಯಲು ಪ್ರೇರೇಪಿಸಿದನಲ್ಲಾ? ದೇವರಾದ ಯೆಹೋವನು ನಿಮ್ಮನ್ನು ಈಜಿಪ್ಟಿನಿಂದ ಬಿಡಿಸಿದವನು. ಆತನು ನಿಮಗೆ ಹೇಳಿದ ನಿಯಮಗಳಿಗೆ ವಿರುದ್ಧವಾಗಿ ನಡೆಯಲು ಪ್ರೇರೇಪಿಸುವವನನ್ನು ಕೊಲ್ಲಬೇಕು; ನಿಮ್ಮ ಮಧ್ಯದಿಂದ ಅಂಥಾ ದುಷ್ಟತನವನ್ನು ತೆಗೆದುಹಾಕಬೇಕು.

6 "ನಿಮ್ಮ ಹತ್ತಿರದ ಸಂಬಂಧಿಕರಲ್ಲಿ ಯಾರಾದರೂ ಇತರ ದೇವರುಗಳನ್ನು ಅನುಸರಿಸಲು ನಿಮ್ಮನ್ನು ಗುಪ್ತ ವಾಗಿ ಒತ್ತಾಯಮಾಡಬಹುದು. ಅವರು ನಿಮ್ಮ ಸ್ವಂತ ಸಹೋದರನಾಗಿರಬಹುದು, ನಿಮ್ಮ ಮಕ್ಕಳಾಗಿರ ಬಹುದು, ನಿಮ್ಮ ಹೆಂಡತಿಯಾಗಿರಬಹುದು, ಅಥವಾ ಆಪ್ತಗೆಳೆಯನಾಗಿರಬಹುದು. ಅವರು ಬಂದು, 'ಬಾ, ನಾವು ಬೇರೆ ದೇವರನ್ನು ಹಿಂಬಾಲಿಸೋಣ' (ಈ ದೇವ ರನ್ನು ನೀವಾಗಲೀ ನಿಮ್ಮ ಪೂರ್ವಿಕರಾಗಲೀ ತಿಳಿದಿರ ಲಿಲ್ಲ.) 7 ಅವು ನಿಮ್ಮ ಸುತ್ತಮುತ್ತಲಿರುವ ಬೇರೆ ದೇಶ ಗಳಲ್ಲಿ ವಾಸವಾಗಿರುವ ಜನರ ದೇವರುಗಳು. ಅವುಗಳಲ್ಲಿ ಕೆಲವು ಹತ್ತಿರದವುಗಳಾಗಿವೆ; ಕೆಲವು ದೂರದವುಗ ಳಾಗಿವೆ.) 8 ಆ ವ್ಯಕ್ತಿಯ ಸಲಹೆಗೆ ನೀವು ಒಪ್ಪಬಾರದು. ಅವನಿಗೆ ಕಿವಿಗೊಡಬೇಡಿರಿ; ಅವನಿಗೆ ಕನಿಕರತೋರ ಬೇಡಿ; ಅವನು ಸ್ವತಂತ್ರನಾಗಿ ಹೋಗಲು ಬಿಡಬೇಡಿ; ಅವನನ್ನು ಸಂರಕ್ಷಿಸಬೇಡಿ. 9-10 ನೀವು ಅವನನ್ನು ಕೊಂದುಹಾಕಬೇಕು. ನೀವು ಕಲ್ಲೆಸೆದು ಅವನನ್ನು ಸಾಯಿಸಬೇಕು. ನೀವು ಅವನ ಮೇಲೆ ಮೊದಲನೆ ಕಲ್ಲನ್ನು ಎಸೆಯಬೇಕು. ಈಜಿಪ್ಟಿನ ದಾಸತ್ವದಿಂದ ನಿಮ್ಮನ್ನು ಬಿಡಿಸಿ ಕೊಂಡುಬಂದ ನಿಮ್ಮ ದೇವರಾದ ಯೆಹೋವನಿಗೆ ವಿರುದ್ಧವಾಗಿ ನಡೆದುಕೊಳ್ಳುವಂತೆ ನಿಮ್ಮನ್ನು ಪ್ರೇರೇಪಿಸಿ ದವನು ಅವನೇ ಅಲ್ಲವೇ? 11 ಆಗ ಇಸ್ರೇಲಿನ ಎಲ್ಲಾ ಜನ ರಲ್ಲಿ ಭಯವುಂಟಾಗಿ ಅಂಥಾ ಕೆಟ್ಟಕೆಲಸವನ್ನು ಎಂದಿಗೂ ಮಾಡುವುದಿಲ್ಲ.

### ಪಟ್ಟಣಗಳನ್ನು ನಾಶಮಾಡಬೇಕು

12 "ನಿಮ್ಮ ದೇವರಾದ ಯೆಹೋವನು ನಿಮ್ಮ ವಾಸಕ್ಕಾಗಿ ನಿಮಗೆ ಪಟ್ಟಣಗಳನ್ನು ಕೊಟ್ಟಿದ್ದಾನೆ. ಒಂದುವೇಳೆ, ಆ ಪಟ್ಟಣಗಳಲ್ಲಿ ಯಾವುದಾದರೊಂದರ ಬಗ್ಗೆ ನೀವು ಕೆಟ್ಟ ಸುದ್ದಿಯನ್ನು ಕೇಳಬಹುದು. 13 ನಿಮ್ಮ ಸ್ವಂತ ದೇಶ ದಲ್ಲಿರುವ ಕೆಲವು ಕೆಟ್ಟ ಜನರು ಕೆಟ್ಟದನ್ನು ಮಾಡಲು ತಮ್ಮ ಪಟ್ಟಣದ ಜನರನ್ನು ಒತ್ತಾಯಪಡಿಸುತ್ತಿದ್ದಾರೆಂದು ನೀವು ಕೇಳಬಹುದು. ಅವರು ತಮ್ಮ ಪಟ್ಟಣದ ಜನರಿಗೆ, 'ನಾವು ಹೋಗಿ ಬೇರೆ ದೇವರುಗಳ ಸೇವೆ ಮಾಡೋಣ' ಎಂದು ಹೇಳಬಹುದು. (ಈ ದೇವರುಗಳನ್ನು ನೀವು ಹಿಂದೆಂದೂ ತಿಳಿದಿಲ್ಲ.) 14 ನೀವು ಇಂಥ ಸುದ್ದಿಯನ್ನು ಕೇಳಿದರೆ, ಅದು ಸತ್ಯವೇ ಎಂಬುದನ್ನು ತಿಳಿದುಕೊಳ್ಳಲು ನಿಮ್ಮಿಂದಾದಷ್ಟು

ಪ್ರಯತ್ನಿಸಬೇಕು. ಅದು ಸತ್ಯವೆಂಬುದು ನಿಮಗೆ ತಿಳಿದು
ಬಂದರೆ ಮತ್ತು ಅಂಥ ಭಯಂಕರ ಸಂಗತಿಯು ನಿಜ
ವಾಗಿಯೂ ಸಂಭವಿಸಿತೆಂದು ನೀವು ರುಜುವಾತುಪಡಿಸ
ಬಲ್ಲವರಾಗಿದ್ದರೆ, 15ನೀವು ಆ ಪಟ್ಟಣದ ಜನರನ್ನು
ದಂಡಿಸಬೇಕು; ಅವರೆಲ್ಲರನ್ನೂ ಕೊಲ್ಲಬೇಕು; ಅವರ
ಎಲ್ಲಾ ಪಶುಗಳನ್ನು ಸಹ ಕೊಲ್ಲಬೇಕು. ಆ ಪಟ್ಟಣವನ್ನು
ಸಂಪೂರ್ಣವಾಗಿ ನಾಶಮಾಡಬೇಕು. 16ನೀವು ಆ ಪಟ್ಟಣ
ದಲ್ಲಿದ್ದ ಎಲ್ಲಾ ಬೆಲೆಬಾಳುವ ವಸ್ತುಗಳನ್ನು ಪಟ್ಟಣದ
ಮಧ್ಯದಲ್ಲಿ ತಂದುಹಾಕಿ ಅದಕ್ಕೆ ಬೆಂಕಿಹೊತ್ತಿಸಿ ಇಡೀ
ಪಟ್ಟಣವನ್ನು ಬೆಂಕಿಯಿಂದ ಸುಡಬೇಕು. ಇದು ದೇವ
ರಾದ ಯೆಹೋವನಿಗೆ ಸರ್ವಾಂಗಹೋಮವಾಗುವುದು.
ಆ ಪಟ್ಟಣವು ಕಲ್ಲುಗಳ ರಾಶಿಯಾಗಿ ಪರಿಣಮಿಸುವುದು
ಮತ್ತು ಯಾರೂ ಆ ಪಟ್ಟಣವನ್ನು ಮತ್ತೆ ಕಟ್ಟಬಾರದು.
17ಆ ಪಟ್ಟಣದಲ್ಲಿರುವ ಪ್ರತಿಯೊಂದು ವಸ್ತು ನಾಶವಾಗ
ಬೇಕು. ಅದರಲ್ಲಿ ಯಾವುದನ್ನಾದರೂ ನೀವು ನಿಮ್ಮ ಉಪ
ಯೋಗಕ್ಕೆ ಇಟ್ಟುಕೊಳ್ಳಬಾರದು. ನೀವು ಹೀಗೆ ಮಾಡಿದರೆ
ಯೆಹೋವನು ನಿಮ್ಮ ಮೇಲೆ ಸಿಟ್ಟುಗೊಳ್ಳುವುದಿಲ್ಲ.
ಆತನು ನಿಮ್ಮ ಮೇಲೆ ದಯೆತೋರಿಸುವನು. ನಿಮ್ಮ
ಪೂರ್ವಿಕರಿಗೆ ವಾಗ್ದಾನ ಮಾಡಿದ ಪ್ರಕಾರ ನಿಮ್ಮ ದೇಶ
ವನ್ನು ವಿಸ್ತಾರಮಾಡುವನು. 18ನಿಮ್ಮ ದೇವರಾದ
ಯೆಹೋವನಿಗೆ ನೀವು ಕಿವಿಗೊಟ್ಟರೆ, ನಾನು ನಿಮಗೆ
ಕೊಡುವ ಆತನ ಎಲ್ಲಾ ಆಜ್ಞೆಗಳಿಗೆ ವಿಧೇಯರಾದರೆ
ಇದು ಸಂಭವಿಸುವುದು. ನಿಮ್ಮ ದೇವರಾದ
ಯೆಹೋವನು ಸರಿಯೆಂದು ಹೇಳುವ ಕಾರ್ಯಗಳನ್ನೇ
ನೀವು ಮಾಡಬೇಕು.

## ಇಸ್ರೇಲರು ದೇವಜನರು

14 ‘‘ನೀವು ನಿಮ್ಮ ದೇವರಾದ ಯೆಹೋವನ
ಮಕ್ಕಳು. ನಿಮ್ಮಲ್ಲಿ ಯಾರಾದರೂ ಸತ್ತರೆ ನೀವು
ತಲೆಬೋಳಿಸಿಕೊಂಡಾಗಲೀ ನಿಮ್ಮನ್ನು ಕತ್ತರಿಸಿಕೊಂಡಾ
ಗಲೀ ನಿಮ್ಮ ದುಃಖವನ್ನು ಪ್ರದರ್ಶಿಸಕೂಡದು.
2ಯಾಕಂದರೆ ನೀವು ಬೇರೆಯವರಿಗಿಂತ ವಿಭಿನ್ನರು.
ನೀವು ಯೆಹೋವನ ವಿಶೇಷ ಜನರಾಗಿದ್ದೀರಿ. ಲೋಕದ
ಎಲ್ಲಾ ಜನರಲ್ಲಿ ಯೆಹೋವನು ನಿಮ್ಮನ್ನು ತನ್ನ ಸ್ವಕೀಯ
ಜನಾಂಗವನ್ನಾಗಿ ಆರಿಸಿಕೊಂಡಿದ್ದಾನೆ.

## ಇಸ್ರೇಲರು ತಿನ್ನಬಹುದಾದ ಆಹಾರ

3‘‘ಯೆಹೋವನು ಅಸಹ್ಯಪಡುವ ವಸ್ತುಗಳನ್ನು ನೀವು
ತಿನ್ನಬಾರದು. 4ನೀವು ಹಸು, ಕುರಿ, ಆಡು, 5ಜಿಂಕೆ, ದುಪ್ಪಿ,
ಸಾರಂಗ, ಕಾಡುಕುರಿ, ಕಾಡುಮೇಕೆ, ಕಡಬೆ, ಬೆಟ್ಟದ
ಆಡು ಇವುಗಳನ್ನು ತಿನ್ನಬಹುದು. 6ಗೊರಸು ಸೀಳಿರುವ
ಮತ್ತು ಮೆಲುಕು ಹಾಕುವ ಪ್ರಾಣಿಯನ್ನು ನೀವು ತಿನ್ನ
ಬಹುದು. 7ಆದರೆ ಒಂಟೆ, ಮೊಲ, ಬೆಟ್ಟದ ಮೊಲ ಇವು
ಗಳನ್ನು ತಿನ್ನಬಾರದು. ಈ ಪ್ರಾಣಿಗಳು ಮೆಲುಕು
ಹಾಕುತ್ತವೆ ಆದರೆ ಅವುಗಳ ಗೊರಸು ಸೀಳಿಲ್ಲ. ಆದುದ
ರಿಂದ ಅವುಗಳು ಶುದ್ಧಪ್ರಾಣಿಗಳಲ್ಲ. ನೀವು ಅವುಗಳನ್ನು
ಆಹಾರವಾಗಿ ಉಪಯೋಗಿಸಕೂಡದು. 8ನೀವು ಹಂದಿ
ಗಳನ್ನು ತಿನ್ನಬಾರದು. ಅವುಗಳ ಗೊರಸುಗಳು ಸೀಳಿವೆ;
ಆದರೆ ಅವುಗಳು ಮೆಲುಕು ಹಾಕುವುದಿಲ್ಲ. ಆದುದರಿಂದ
ಹಂದಿಯು ನಿಮಗೆ ಶುದ್ಧ ಆಹಾರವಾಗುವುದಿಲ್ಲ;
ಹಂದಿಯ ಹೆಣವನ್ನೂ ನೀವು ಮುಟ್ಟಬಾರದು.

9‘‘ಮೀನುಗಳಲ್ಲಿ ಪರೆ ಮತ್ತು ಈಜುರೆಕ್ಕೆಗಳಿರುವು
ದನ್ನು ಆಹಾರವಾಗಿ ಉಪಯೋಗಿಸಬಹುದು. 10ಪರೆ,
ಈಜುರೆಕ್ಕೆಗಳಿಲ್ಲದ ಮೀನುಗಳನ್ನು ತಿನ್ನಬಾರದು. ಅವು
ಅಶುದ್ಧ.

11‘‘ನೀವು ಶುದ್ಧ ಪಕ್ಷಿಗಳನ್ನು ತಿನ್ನಬಹುದು. 12ಆದರೆ,
ಗಿಡುಗ, ರಣಹದ್ದು, ಕ್ರೌಂಚ, 13ಸಕಲವಿಧವಾದ ಹದ್ದು
ಗಿಡುಗಗಳು. 14ಸಕಲ ವಿಧವಾದ ಕಾಗೆಗಳು, 15ಗೂಬೆ
ಗಳು, ಸಣ್ಣಗೂಬೆಗಳು, ಕಡಲಕಾಗೆ, 16–17ಸಕಲವಿಧ
ವಾದ ಗೂಬೆಗಳು, 18ಕೊಕ್ಕರೆಗಳು, ಬಕಪಕ್ಷಿ, ಬಾವ
ಲಿಗಳು ಅಶುದ್ಧವಾದ ಕಾರಣ ತಿನ್ನಬಾರದು.

19‘‘ರೆಕ್ಕೆಯುಳ್ಳ ಹುಳುಗಳೆಲ್ಲಾ ಅಶುದ್ಧ. ಆದುದರಿಂದ
ಅವುಗಳನ್ನು ತಿನ್ನಬೇಡಿ. 20ಆದರೆ ನೀವು ಶುದ್ಧವಾದ
ಯಾವ ಪಕ್ಷಿಯನ್ನು ಬೇಕಾದರೂ ತಿನ್ನಬಹುದು.

21‘‘ಸತ್ತು ಬಿದ್ದ ಯಾವ ಪ್ರಾಣಿಯನ್ನಾಗಲೀ ತಿನ್ನ
ಬಾರದು. ನಿಮ್ಮ ಊರಲ್ಲಿರುವ ಪರದೇಶಿಗೆ ಕೊಡಿರಿ.
ಅವನು ತಿನ್ನಬಹುದು, ಅಥವಾ ಆ ಸತ್ತ ಪ್ರಾಣಿಯನ್ನು
ಪರದೇಶಿಗೆ ಮಾರಬಹುದು. ಆದರೆ ನೀವು ತಿನ್ನಬಾರದು.
ಯಾಕಂದರೆ ನೀವು ಯೆಹೋವನ ಜನರು. ಆತನ
ಸ್ವಕೀಯ ಪ್ರಜೆಗಳು.

‘‘ಆಡಿನ ಮರಿಯನ್ನು ಅದರ ತಾಯಿಯ ಹಾಲಿನಲ್ಲಿ
ಬೇಯಿಸಬೇಡಿರಿ.

## ದಶಮಾಂಶ

22‘‘ಪ್ರತಿ ವರುಷ ನಿಮ್ಮ ಹೊಲದಲ್ಲಿ ಬೆಳೆಯುವ ಹತ್ತ
ನೆಯ ಒಂದು ಅಂಶವನ್ನು ಪ್ರತ್ಯೇಕಿಸಿಡಿರಿ. 23ನಿಮ್ಮ ದೇವ
ರಾದ ಯೆಹೋವನು ತನ್ನ ವಿಶೇಷ ವಾಸಸ್ಥಾನವಾಗಿ
ಯಾವ ಸ್ಥಳವನ್ನು ಆರಿಸಿಕೊಳ್ಳುತ್ತಾನೊ ಆ ಸ್ಥಳಕ್ಕೆ ನೀವು
ಹೋಗಬೇಕು. ನಿಮ್ಮ ದೇವರಾದ ಯೆಹೋವನ ಜೊತೆ
ಯಲ್ಲಿರುವುದಕ್ಕಾಗಿ ನೀವು ಅಲ್ಲಿಗೆ ಹೋಗಬೇಕು. ಆ
ಸ್ಥಳದಲ್ಲಿ, ನೀವು ಬೆಳೆಯುವ ಬೆಳೆಗಳಲ್ಲಿ ಹತ್ತನೆ ಒಂದು
ಭಾಗವನ್ನು, ನಿಮ್ಮ ಧಾನ್ಯಗಳಲ್ಲಿ ಹತ್ತನೆ ಒಂದು ಭಾಗ
ವನ್ನು, ನಿಮ್ಮ ಹೊಸ ದ್ರಾಕ್ಷಾರಸವನ್ನು, ನಿಮ್ಮ ಎಣ್ಣೆ
ಯನ್ನು, ನಿಮ್ಮ ಹಿಂಡುಗಳ ಮತ್ತು ಮಂದೆಗಳ ಚೊಚ್ಚಲು

ಪಶುಗಳನ್ನು ಯೆಹೋವನ ಪ್ರಸನ್ನತೆಯಲ್ಲಿ ತಿನ್ನಬೇಕು.
ನಿಮ್ಮ ದೇವರಾದ ಯೆಹೋವನನ್ನು ಗೌರವಿಸ
ಬೇಕೆಂಬುದನ್ನು ನೀವು ಯಾವಾಗಲೂ ಈ ರೀತಿಯಲ್ಲಿ
ಜ್ಞಾಪಕ ಮಾಡಿಕೊಳ್ಳುವಿರಿ. 24 ಒಂದುವೇಳೆ ಆ ವಿಶೇಷ
ಸ್ಥಳವು ನೀವು ಪ್ರಯಾಣ ಮಾಡಲಾರದಷ್ಟು ದೂರ
ವಾಗಿದ್ದರೆ, ಯೆಹೋವನು ಆಶೀರ್ವದಿಸಿದ ನಿಮ್ಮ ಎಲ್ಲಾ
ಬೆಳೆಗಳಲ್ಲಿ ದಶಾಂಶವನ್ನು ಅಲ್ಲಿಗೆ ಕೊಂಡೊಯ್ಯಲು
ಸಾಧ್ಯವಾಗದಿದ್ದಲ್ಲಿ, 25 ದಶಾಂಶದ ಆ ಬೆಳೆಗಳನ್ನು ಮಾರಿ,
ಬಂದ ಹಣವನ್ನು ಯೆಹೋವನು ಆರಿಸಿಕೊಂಡಿರುವ
ವಿಶೇಷಸ್ಥಳಕ್ಕೆ ತೆಗೆದುಕೊಂಡು ಹೋಗಿ. 26 ಅಲ್ಲಿ ನಿಮಗೆ
ಬೇಕಾದ ದನಕುರಿಗಳನ್ನು ಮತ್ತು ನಿಮಗೆ ಬೇಕಾಗುವ
ಆಹಾರವಸ್ತುಗಳನ್ನು ಮತ್ತು ಪಾನೀಯಗಳನ್ನು ಆ ಹಣ
ದಿಂದ ಖರೀದಿಮಾಡಿ ನೀವೂ ನಿಮ್ಮ ಕುಟುಂಬದವರೂ
ನಿಮ್ಮ ದೇವರಾದ ಯೆಹೋವನ ಆ ಸ್ಥಳದಲ್ಲಿ ತಿಂದು
ಸಂತೋಷಪಡಿ. 27 ನಿಮ್ಮ ಊರಲ್ಲಿ ನೆಲೆಸಿರುವ ಲೇವಿ
ಯರನ್ನು ಮರೆಯಬೇಡಿರಿ. ನಿಮ್ಮ ಆಹಾರದಲ್ಲಿ ಅವ
ರಿಗೂ ಪಾಲು ಕೊಡಿರಿ. ಯಾಕಂದರೆ ಅವರಿಗೆ ದೇಶದಲ್ಲಿ
ನಿಮ್ಮ ಹಾಗೆ ಸ್ವಾಸ್ಥ್ಯ ದೊರಕುವುದಿಲ್ಲ.

28 ‘‘ಮೂರು ವರ್ಷಕ್ಕೊಮ್ಮೆ ನಿಮ್ಮ ದವಸಧ್ಯಾನ್ಯಗಳ
ಹತ್ತನೆಯ ಒಂದು ಭಾಗವನ್ನು ನಿಮ್ಮ ಊರಿನಲ್ಲಿ ಶೇಖರಿ
ಸಿಡಿರಿ. 29 ಇದು ಲೇವಿಯರಿಗಾಗಿ. ಯಾಕಂದರೆ ಅವರಿಗೆ
ಸ್ವಂತ ಭೂಮಿ ಇಲ್ಲವಲ್ಲಾ. ಅಲ್ಲದೆ ಈ ಧಾನ್ಯವನ್ನು ನಿಮ್ಮ
ಊರಲ್ಲಿರುವ ಬಡಜನರಿಗೋಸ್ಕರವಾಗಿಯೂ ಪರದೇಶಿ
ಗಳಿಗಾಗಿಯೂ, ವಿಧವೆಯರಿಗಾಗಿಯೂ ಮತ್ತು ಅನಾಥ
ಮಕ್ಕಳಿಗಾಗಿಯೂ ಉಪಯೋಗಿಸಬೇಕು. ಅವರು
ಬಂದು ಊಟಮಾಡಿ ತೃಪ್ತರಾಗಲಿ. ನೀವು ಹೀಗೆ ಮಾಡಿ
ದರೆ ನಿಮ್ಮ ದೇವರಾದ ಯೆಹೋವನು ನಿಮ್ಮ ಕಾರ್ಯ
ಗಳನ್ನೆಲ್ಲಾ ಸಫಲಪಡಿಸಿ ಆಶೀರ್ವದಿಸುವನು.

## ಸಾಲಗಳನ್ನು ವಜಾಮಾಡುವ ವಿಶೇಷ ವರ್ಷ

15 ‘‘ಪ್ರತೀ ಏಳು ವರುಷಗಳ ಅಂತ್ಯದಲ್ಲಿ ನೀವು
ಕೊಟ್ಟ ಸಾಲಗಳನ್ನು ವಜಾಮಾಡಬೇಕು.
2 ಒಬ್ಬನು ಇನ್ನೊಬ್ಬ ಇಸ್ರೇಲನಿಗೆ ಸಾಲ ಕೊಟ್ಟರೆ ಆ ಸಾಲ
ವನ್ನು ವಜಾ ಮಾಡಬೇಕು. ತನ್ನ ಸಹೋದರನಾದ
ಇಸ್ರೇಲನಿಂದ ಸಾಲ ಹಿಂದೆ ಕೇಳಬಾರದು. ಆ ವರುಷ
ದಲ್ಲಿ ಸಾಲವನ್ನೆಲ್ಲಾ ವಜಾ ಮಾಡಬೇಕೆಂಬುದಾಗಿ
ದೇವರು ಆದೇಶವನ್ನು ನೀಡಿದ್ದಾನೆ. 3 ಸಾಲಗಾರನು ಪರ
ದೇಶಿಯಾಗಿದ್ದರೆ ಅವನು ಸಾಲ ಹಿಂತಿರುಗಿಸಬೇಕು.
ಆದರೆ ಇಸ್ರೇಲರಲ್ಲಿ ಯಾರಾದರೂ ನಿಮ್ಮಿಂದ ಸಾಲ
ತೆಗೆದುಕೊಂಡಿದ್ದರೆ ಅದನ್ನು ವಜಾ ಮಾಡಬೇಕು. 4 ನಿಮ್ಮ
ದೇಶದಲ್ಲಿ ಯಾರೂ ಬಡವರಾಗಿರಬಾರದು.
ಯಾಕಂದರೆ ಯೆಹೋವನೇ ನಿಮಗೆ ಈ ದೇಶವನ್ನು
ಕೊಡತ್ತಿದ್ದಾನೆ; ಮತ್ತು ಯೆಹೋವನು ನಿಮ್ಮನ್ನು ಅಧಿಕ
ವಾಗಿ ಆಶೀರ್ವದಿಸುತ್ತಾನೆ. 5 ನೀವು ಆತನ ಆಜ್ಞೆಗಳನ್ನು
ಅನುಸರಿಸುವವರಾಗಿದ್ದಲ್ಲಿ, ಆತನ ವಿಧಿಕ್ರಮಗಳಿಗೆ
ವಿಧೇಯರಾಗಿದ್ದಲ್ಲಿ ದೇವರು ನಿಮ್ಮನ್ನು ಆಶೀರ್ವದಿ
ಸುವನು. 6 ಆತನು ಮಾಡಿದ ವಾಗ್ದಾನದ ಪ್ರಕಾರ ಆಶೀರ್ವ
ದಿಸುವನು. ಆಗ ನಿಮ್ಮಲ್ಲಿ ಬೇರೆ ಜನಾಂಗಗಳಿಗೆ ಸಾಲ
ಕೊಡಲು ಯಥೇಚ್ಛವಾಗಿ ಹಣವಿರುವುದು. ನಿಮಗೆ ಬೇರೆ
ಯವರಿಂದ ಹಣ ಸಾಲ ತೆಗೆದುಕೊಳ್ಳುವ ಅವಶ್ಯಕತೆ ಇರು
ವುದಿಲ್ಲ. ನೀವು ಎಷ್ಟೋ ದೇಶಗಳನ್ನು ಆಳುವಿರಿ. ಆದರೆ
ಆ ದೇಶಗಳು ನಿಮ್ಮನ್ನು ಆಳವು.

7 ‘‘ನಿಮ್ಮ ದೇವರಾದ ಯೆಹೋವನು ನಿಮಗೆ ಕೊಡುವ
ದೇಶದಲ್ಲಿ ನೀವು ವಾಸಿಸುವಾಗ ಒಂದು ವೇಳೆ ನಿಮ್ಮ ಮಧ್ಯ
ದಲ್ಲಿ ಒಬ್ಬ ಬಡವನಿರಬಹುದು. ನೀವು ಸ್ವಾರ್ಥರಾಗಿ
ಅವನಿಗೆ ಸಹಾಯಮಾಡಲು ನಿರಾಕರಿಸಬಾರದು.
8 ನಿಮ್ಮಲ್ಲಿರುವುದನ್ನು ನೀವು ಅವನೊಂದಿಗೆ ಹಂಚಿಕೊಳ್ಳಿ.
ಅವನ ಅಗತ್ಯತೆಗೆ ತಕ್ಕಂತೆ ಸಾಲ ಕೊಡಿರಿ.

9 ‘‘ಸಾಲ ವಜಾಮಾಡುವ ಏಳನೆಯ ವರ್ಷ ಸಮೀಪ
ವಾಯಿತೆಂದು ನೀವು ಯಾರಿಗೂ ಸಾಲ ಕೊಡದೆ ಸಹಾಯ
ಮಾಡದೇ ಇರಬಾರದು. ಅಂಥಾ ದುಷ್ಟ ಆಲೋಚನೆ
ನಿಮ್ಮ ಮನಸ್ಸಿನೊಳಗೆ ಹುಟ್ಟದಿರಲಿ. ಸಹಾಯದ ಅಗತ್ಯ
ವಿರುವ ವ್ಯಕ್ತಿಯ ಬಗ್ಗೆ ನಿಮ್ಮಲ್ಲಿ ಯಾವ ಕೆಟ್ಟ ಆಲೋಚ
ನೆಯೂ ಇರಬಾರದು. ನೀವು ಆ ಬಡ ವ್ಯಕ್ತಿಗೆ ಸಹಾಯ
ಮಾಡದಿದ್ದರೆ ನಿಮ್ಮ ವಿರುದ್ಧವಾಗಿ ಅವನು ಯೆಹೋವ
ನಿಗೆ ದೂರು ಹೇಳುವನು. ಆಗ ನೀವು ಯೆಹೋವನ
ಮುಂದೆ ದೋಷಿಗಳಾಗಿ ಕಂಡುಬರುವಿರಿ.

10 ‘‘ಆ ಬಡಮನುಷ್ಯನಿಗೆ ನಿಮ್ಮಿಂದ ಎಷ್ಟು ಸಹಾಯ
ಮಾಡಲು ಸಾಧ್ಯವಿದೆಯೋ ಅಷ್ಟು ಸಹಾಯಮಾಡಿ;
ಕೊಡುವುದಕ್ಕೆ ಬೇಸರಪಡಬೇಡಿ. ಯಾಕಂದರೆ ನಿಮ್ಮ
ದೇವರಾದ ಯೆಹೋವನು ನಿಮ್ಮ ಒಳ್ಳೆಯ ಕಾರ್ಯಗಳಿ
ಗಾಗಿ ನಿಮ್ಮನ್ನು ಆಶೀರ್ವದಿಸುವನು; ನಿಮ್ಮ ಕೆಲಸವನ್ನೆಲ್ಲಾ
ಸಫಲಪಡಿಸುವನು. 11 ನಿಮ್ಮ ದೇಶದಲ್ಲಿ ಯಾವಾಗಲೂ
ಬಡಜನರು ಇರುತ್ತಾರೆ. ಅದಕ್ಕಾಗಿಯೇ ನಿಮ್ಮ ಸಹೋದ
ರರಿಗೆ ಸಹಾಯ ಮಾಡಬೇಕೆಂದು ನಿಮಗೆ
ಆಜ್ಞಾಪಿಸುತ್ತೇನೆ.

## ಗುಲಾಮರನ್ನು ಸ್ವತಂತ್ರರನ್ನಾಗಿ ಮಾಡುವುದು

12 ‘‘ನೀವು ಹೀಬ್ರೂ ಮನುಷ್ಯನನ್ನೋ ಸ್ತ್ರೀಯನ್ನೋ
ನಿಮ್ಮ ಗುಲಾಮರಾಗಿ ಕ್ರಯಕ್ಕೆ ತೆಗೆದುಕೊಳ್ಳಬಹುದು.
ಅವರನ್ನು ನಿಮ್ಮ ದಾಸರಾಗಿ ಆರು ವರ್ಷಗಳ ಕಾಲ ಇಟ್ಟು
ಕೊಳ್ಳಬಹುದು. ಆದರೆ ಏಳನೆಯ ವರ್ಷದಲ್ಲಿ ನೀವು
ಅವರನ್ನು ಸ್ವತಂತ್ರರಾಗಿ ಬಿಟ್ಟುಬಿಡಬೇಕು. 13 ಅವರನ್ನು
ಹಿಂದಕ್ಕೆ ಕಳುಹಿಸುವಾಗ ಬರಿಗೈಯಲ್ಲಿ ಕಳುಹಿಸಬಾರದು.

[14]ನೀವು ಅವರಿಗೆ ನಿಮ್ಮ ಪಶುಗಳಲ್ಲಿ ಕೆಲವನ್ನು, ಸ್ವಲ್ಪ ಧಾನ್ಯವನ್ನು ಮತ್ತು ಸ್ವಲ್ಪ ದ್ರಾಕ್ಷಾರಸವನ್ನು ಕೊಡಬೇಕು. ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಆಶೀರ್ವದಿಸಿ ನಿಮಗೆ ಹೇರಳವಾಗಿ ಅನುಗ್ರಹಿಸುತ್ತಾನೆ. ಆದುದರಿಂದ ನಿಮ್ಮ ಸೇವಕರಿಗೆ ಒಳ್ಳೆಯವುಗಳನ್ನು ಹೇರಳವಾಗಿ ಕೊಡಿರಿ.
[15]ನೀವು ಈಜಿಪ್ಟಿನಲ್ಲಿ ದಾಸತ್ವದಲ್ಲಿದ್ದುದನ್ನು ನೆನಪುಮಾಡಿರಿ. ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಬಿಡಿಸಿದನು. ಆದುದರಿಂದಲೇ ನಾನು ಈ ಆಜ್ಞೆಯನ್ನು ನಿಮಗೆ ಕೊಡುತ್ತಿದ್ದೇನೆ.

[16]“ಆದರೆ ನಿಮ್ಮ ಸೇವಕರಲ್ಲಿ ಒಬ್ಬನು, ‘ನಾನು ನಿಮ್ಮನ್ನು ಬಿಟ್ಟುಹೋಗುವುದಿಲ್ಲ’ ಎಂದು ಹೇಳಿದರೆ, ನಿಮ್ಮನ್ನು ಮತ್ತು ನಿಮ್ಮ ಕುಟುಂಬವನ್ನು ಅವನು ಪ್ರೀತಿಸುವುದರಿಂದ ಮತ್ತು ನಿಮ್ಮೊಂದಿಗೆ ಒಳ್ಳೆಯ ಜೀವಿತವನ್ನು ಅವನು ಅನುಭವಿಸಿದ್ದರಿಂದ ಅವನು ನಿಮ್ಮೊಂದಿಗೆ ಇರಲು ಇಷ್ಟಪಟ್ಟರೆ
[17]ನಿಮ್ಮ ಬಾಗಿಲಿನ ನಿಲುವು ಕಂಬದ ಬಳಿಯಲ್ಲಿ ನಿಲ್ಲಿಸಿ ಅವನ ಕಿವಿಯನ್ನು ಒಂದು ಹರಿತವಾದ ಸಾಧನದಿಂದ ತೂತು ಮಾಡಬೇಕು. ಇದು ಅವನು ನಿಮ್ಮ ಶಾಶ್ವತ ದಾಸನು ಎಂದು ತೋರಿಸುವುದು. ಗುಲಾಮಳಿಗೂ ಇದು ಅನ್ವಯಿಸುತ್ತದೆ.

[18]“ನಿಮ್ಮ ಗುಲಾಮರನ್ನು ಸ್ವತಂತ್ರರಾಗಿ ಬಿಡಬೇಕಲ್ಲಾ ಎಂದು ಬೇಸರಪಡಬೇಡಿ. ಅವರು ಅರ್ಧಕೂಲಿ ತೆಗೆದುಕೊಂಡು ಆರು ವರುಷ ನಿಮ್ಮ ಸೇವೆ ಮಾಡಿದ್ದಾರಲ್ಲಾ? ನಿಮ್ಮ ಕಾರ್ಯಗಳನ್ನೆಲ್ಲಾ ನಿಮ್ಮ ದೇವರಾದ ಯೆಹೋವನು ಸಫಲಪಡಿಸುವನು.

## ಚೊಚ್ಚಲ ಪ್ರಾಣಿಗಳ ಬಗ್ಗೆ ನಿಯಮಗಳು

[19]“ನಿಮ್ಮ ಹಿಂಡಿನಲ್ಲಾಗಲೀ ಹಟ್ಟಿಯಲ್ಲಾಗಲೀ ಚೊಚ್ಚಲಮರಿಗಳು ನನಗೆ ವಿಶೇಷವಾದವುಗಳು. ನೀವು ಅವುಗಳನ್ನು ಯೆಹೋವನಿಗೆ ಸಮರ್ಪಿಸಬೇಕು. ಅಂಥಾ ಪ್ರಾಣಿಗಳನ್ನು ನಿಮ್ಮ ಕೆಲಸಕಾರ್ಯಗಳಿಗಾಗಿ ಉಪಯೋಗಿಸಕೂಡದು. ಮತ್ತು ಅಂಥಾ ಕುರಿಮರಿಗಳ ಉಣ್ಣೆಯನ್ನು ಕತ್ತರಿಸಬಾರದು.
[20]ಪ್ರತಿ ವರುಷ ಚೊಚ್ಚಲು ಪ್ರಾಣಿಗಳನ್ನು ನಿಮ್ಮ ದೇವರಾದ ಯೆಹೋವನು ಆರಿಸಿದ ಸ್ಥಳದಲ್ಲಿ ನೀವು ನಿಮ್ಮ ಹೆಂಡತಿ ಮಕ್ಕಳೊಂದಿಗೆ ತಿನ್ನಬೇಕು.

[21]“ಆದರೆ ಆ ಚೊಚ್ಚಲು ಪ್ರಾಣಿಗಳು ಕುಂಟಾಗಿದ್ದರೆ ಕುರುಡಾಗಿದ್ದರೆ ಅಥವಾ ಬೇರಾವ ಅಂಗವಿಕಲತೆಗೆ ಒಳಗಾಗಿದ್ದರೆ, ನಿಮ್ಮ ದೇವರಾದ ಯೆಹೋವನಿಗೆ ಅವುಗಳನ್ನು ಸಮರ್ಪಿಸಕೂಡದು.
[22]ಅವುಗಳನ್ನು ನಿಮ್ಮ ಮನೆಗಳಲ್ಲಿಯೇ ಬೇಕಾದರೆ ತಿನ್ನಬಹುದು. ಅದನ್ನು ಯಾರು ಬೇಕಾದರೂ ಅಂದರೆ ಶುದ್ಧರೂ ಅಶುದ್ಧರೂ ತಿನ್ನಬಹುದು. ಜಿಂಕೆಯನ್ನು, ಟಗರನ್ನು ತಿನ್ನಲು ಯಾವ ನಿಯಮಗಳು ಇವೆಯೋ, ಅದೇ ನಿಯಮಗಳು ಇದಕ್ಕೂ ಅನ್ವಯಿಸುತ್ತವೆ.
[23]ಅವುಗಳ ರಕ್ತವನ್ನು ತಿನ್ನಬಾರದು. ಅದನ್ನು ನೀರಿನಂತೆ ನೆಲದ ಮೇಲೆ ಚೆಲ್ಲಿ ಬಿಡಬೇಕು.

## ಪಸ್ಕಹಬ್ಬ

16 “ಅಬೀಬ್ ತಿಂಗಳನ್ನು ನೆನಪಿನಲ್ಲಿಟ್ಟುಕೊಳ್ಳಿರಿ. ಆ ತಿಂಗಳಲ್ಲಿ ನಿಮ್ಮ ದೇವರಾದ ಯೆಹೋವನನ್ನು ಗೌರವಿಸುವುದಕ್ಕಾಗಿ ಪಸ್ಕಹಬ್ಬವನ್ನು ಆಚರಿಸಬೇಕು. ಯಾಕಂದರೆ ಆ ತಿಂಗಳಲ್ಲೇ ನಿಮ್ಮ ದೇವರಾದ ಯೆಹೋವನು ರಾತ್ರಿಯಲ್ಲಿ ನಿಮ್ಮನ್ನು ಈಜಿಪ್ಟಿನಿಂದ ಕರೆದುಕೊಂಡು ಬಂದನು.
[2]ನಿಮ್ಮ ದೇವರು ಆರಿಸುವ ಪ್ರತ್ಯೇಕ ಸ್ಥಳಕ್ಕೆ ನೀವು ಹೋಗಿ ಅಲ್ಲಿ ಪಸ್ಕದ ಯಜ್ಞಾರ್ಪಣೆ ಮಾಡಿ ನಿಮ್ಮ ಯೆಹೋವನನ್ನು ಮಹಿಮೆಪಡಿಸಬೇಕು. ಅಲ್ಲಿ ದನವನ್ನಾಗಲೀ ಆಡನ್ನಾಗಲೀ ಯಜ್ಞವಾಗಿ ಅರ್ಪಿಸಬೇಕು.
[3]ಯಜ್ಞ ಪಶುವಿನೊಂದಿಗೆ ಹುಳಿಯಿಲ್ಲದ ರೊಟ್ಟಿಯನ್ನು ಏಳು ದಿನ ತಿನ್ನಬೇಕು. ಈ ಸಮಯದಲ್ಲಿ ಹುಳಿಬೆರೆಸಿದ ರೊಟ್ಟಿಯನ್ನು ತಿನ್ನಲೇಬಾರದು. ಹುಳಿಯಿಲ್ಲದ ರೊಟ್ಟಿಗೆ ‘ಸಂಕಟದ ರೊಟ್ಟಿ’ ಎಂದು ಕರೆಯಬೇಕು. ಯಾಕಂದರೆ ನೀವು ಈಜಿಪ್ಟಿನಲ್ಲಿ ದಾಸತ್ವದಲ್ಲಿದ್ದಾಗ ಅನುಭವಿಸಿದ್ದ ಸಂಕಟವನ್ನು ಅದು ನೆನಪಿಗೆ ತರುತ್ತದೆ. ಅಲ್ಲಿಂದ ಎಷ್ಟು ಅವಸರವಾಗಿ ನೀವು ಹೊರಬಂದಿರಿ! ಇದನ್ನು ನಿಮ್ಮ ಜೀವಮಾನ ಪರ್ಯಂತ ಜ್ಞಾಪಿಸಿಕೊಳ್ಳಬೇಕು.
[4]ಏಳು ದಿನಗಳ ತನಕ ಇಡೀ ದೇಶದಲ್ಲಿ ಯಾರ ಮನೆಯಲ್ಲಿಯಾದರೂ ರೊಟ್ಟಿಗೆ ಬೆರೆಸುವ ಹುಳಿಯು ಇರಬಾರದು. ಮತ್ತು ಮೊದಲನೇ ದಿನದ ಸಾಯಂಕಾಲ ನೀವು ವಧಿಸುವ ಪ್ರಾಣಿಯ ಮಾಂಸವು ಮುಂಜಾನೆಯೊಳಗೆ ತಿಂದು ಮುಗಿಸತಕ್ಕದ್ದು.

[5]“ಪಸ್ಕದ ಪಶುವನ್ನು ದೇಶದ ಬೇರೆ ಯಾವ ಸ್ಥಳದಲ್ಲಿಯೂ ಕೊಯ್ಯಬಾರದು.
[6]ನಿಮ್ಮ ದೇವರಾದ ಯೆಹೋವನು ತನ್ನ ವಿಶೇಷವಾದ ವಾಸಸ್ಥಾನಕ್ಕಾಗಿ ಆರಿಸಿಕೊಳ್ಳುವ ಸ್ಥಳದಲ್ಲಿಯೇ ಸಾಯಂಕಾಲ ಸೂರ್ಯಾಸ್ತಮವಾದಾಗ ಪಸ್ಕಹಬ್ಬದ ಪಶುವನ್ನು ಅರ್ಪಿಸಬೇಕು. ದೇವರು ನಿಮ್ಮನ್ನು ಈಜಿಪ್ಟಿನಿಂದ ಕರೆದುಕೊಂಡು ಬಂದ ಕಾಲವನ್ನು ಈ ಪವಿತ್ರ ದಿನವು ನಿಮಗೆ ನೆನಪು ಮಾಡುತ್ತದೆ.
[7]ನಿಮ್ಮ ದೇವರಾದ ಯೆಹೋವನು ತನ್ನ ವಾಸಸ್ಥಾನಕ್ಕಾಗಿ ಆರಿಸುವ ಸ್ಥಳದಲ್ಲಿ ನೀವು ಪಸ್ಕದ ಪಶುವನ್ನು ಅಡಿಗೆ ಮಾಡಿ ತಿನ್ನಬೇಕು. ಆಮೇಲೆ ಮುಂಜಾನೆ ನೀವು ನಿಮ್ಮ ನಿಮ್ಮ ಮನೆಗಳಿಗೆ ಹೋಗಬಹುದು.
[8]ಆರು ದಿನಗಳ ತನಕ ನೀವು ಹುಳಿ ಇಲ್ಲದ ರೊಟ್ಟಿಗಳನ್ನು ತಿನ್ನಬೇಕು. ಏಳನೆಯ ದಿನದಲ್ಲಿ ನೀವು ಏನೂ ಕೆಲಸ ಮಾಡದೆ ಇರಬೇಕು. ಆ ದಿನ ಒಟ್ಟಾಗಿ ಸೇರಿ ನಿಮ್ಮ ದೇವರಾದ ಯೆಹೋವನನ್ನು ಘನಪಡಿಸಬೇಕು.

### ಪಂಚಾಶತ್ತಮ ಹಬ್ಬ

9‘‘ನಿಮ್ಮ ಹೊಲಗಳ ಬೆಳೆಯನ್ನು ಕೊಯ್ಯಲು
ಪ್ರಾರಂಭಿಸಿದ ದಿನದಿಂದ ಏಳು ವಾರಗಳನ್ನು ಲೆಕ್ಕ
ಮಾಡಿರಿ. 10ಅಲ್ಲಿ ನಿಮ್ಮ ದೇವರಾದ ಯೆಹೋವನಿಗೆ
ವಾರಗಳ ಹಬ್ಬವನ್ನು ಆಚರಿಸಿರಿ. ಅಲ್ಲಿ ನಿಮ್ಮ ವಿಶೇಷ
ಕಾಣಿಕೆಗಳನ್ನು ತಂದು ಸಮರ್ಪಿಸಿರಿ. ನಿಮ್ಮ ದೇವರು
ನಿಮ್ಮನ್ನು ಎಷ್ಟು ಆಶೀರ್ವದಿಸಿರುತ್ತಾನೆಂದು ಯೋಚಿಸಿ
ಅದರ ಪ್ರಕಾರ ನಿಮ್ಮ ಕಾಣಿಕೆಗಳನ್ನು ಸಲ್ಲಿಸಿರಿ.
11ಯೆಹೋವನು ಆರಿಸಿರುವ ಸ್ಥಳದಲ್ಲಿ ನೀವೂ ನಿಮ್ಮ
ಜನರು ಒಟ್ಟಾಗಿ ಸೇರಿ ದೇವರ ಸನ್ನಿಧಾನದಲ್ಲಿ ಸಂತೋಷ
ಪಡಿರಿ. ನಿಮ್ಮ ಹೆಂಡತಿ ಮಕ್ಕಳನ್ನು ಅಲ್ಲದೆ ನಿಮ್ಮ ಸೇವಕ
ಸೇವಕಿಯರನ್ನು ನಿಮ್ಮ ಪಟ್ಟಣದಲ್ಲಿರುವ ಲೇವಿಯರನ್ನು
ಮತ್ತು ವಿಧವೆಯರನ್ನು, ಅನಾಥರನ್ನು, ಪರದೇಶಿಗಳನ್ನು
ಕರೆದುಕೊಂಡು ಸಂತೋಷಪಡಿರಿ. 12ನೀವು ಈಜಿಪ್ಟಿನಲ್ಲಿ
ಗುಲಾಮರಾಗಿದ್ದಿರಿ ಎಂದು ನೆನಪುಮಾಡಿಕೊಂಡು
ಯೆಹೋವನ ವಿಧಿಗಳನ್ನು ತಪ್ಪದೇ ಅನುಸರಿಸಿರಿ.

### ಪರ್ಣಶಾಲೆಗಳ ಹಬ್ಬ

13‘‘ಕಣಗಳ ಕೆಲಸ ಮತ್ತು ದ್ರಾಕ್ಷಿಯ ಅಲೆಗಳ ಕೆಲಸ
ಮುಕ್ತಾಯವಾಗಿ ನಿಮ್ಮ ಮನೆಗಳಲ್ಲಿ ಅವುಗಳನ್ನು ಶೇಖರಿ
ಸಿದ ಬಳಿಕ ಏಳು ದಿನಗಳ ನಂತರ ನೀವು ಪರ್ಣಶಾಲೆಗಳ
ಹಬ್ಬವನ್ನು ಆಚರಿಸಬೇಕು. 14ನಿಮ್ಮ ಹೆಂಡತಿ ಮಕ್ಕ
ಳೊಂದಿಗೆ, ಸೇವಕ ಸೇವಕಿಯರೊಂದಿಗೆ, ಮತ್ತು ನಿಮ್ಮ
ಊರುಗಳಲ್ಲಿರುವ ಲೇವಿಯರೊಂದಿಗೆ, ಪರದೇಶಿಗ
ಳೊಂದಿಗೆ, ಅನಾಥರೊಂದಿಗೆ ಮತ್ತು ವಿಧವೆಯ
ರೊಂದಿಗೆ ಆನಂದದಿಂದ ಹಬ್ಬ ಮಾಡಿರಿ. 15ನಿಮ್ಮ
ಯೆಹೋವನು ಆರಿಸಿಕೊಂಡಿರುವ ವಿಶೇಷ ಸ್ಥಳದಲ್ಲಿ ಈ
ಹಬ್ಬವನ್ನು ಏಳು ದಿನ ಆಚರಿಸಿರಿ. ನಿಮ್ಮ ದೇವರಾದ
ಯೆಹೋವನನ್ನು ಘನಪಡಿಸುವುದಕ್ಕಾಗಿ ಸಂತೋಷ
ದಿಂದ ಹಬ್ಬವನ್ನು ಆಚರಿಸಿರಿ. ನಿಮ್ಮ ದೇವರಾದ
ಯೆಹೋವನು ನಿಮ್ಮ ಸುಗ್ಗಿಯನ್ನು ಮತ್ತು ನಿಮ್ಮ ಎಲ್ಲಾ
ಕೆಲಸಕಾರ್ಯಗಳನ್ನು ಆಶೀರ್ವದಿಸಿದನು. ಆದ್ದರಿಂದ
ಸಂತೋಷಪಡಿರಿ!

16‘‘ಯೆಹೋವನು ತನ್ನ ಆಲಯಕ್ಕಾಗಿ ಆರಿಸುವ ಆ
ವಿಶೇಷ ಸ್ಥಳಕ್ಕೆ ನೀವೆಲ್ಲಾ ವರುಷದಲ್ಲಿ ಮೂರು ಬಾರಿ
ಅಂದರೆ ಹುಳಿಯಿಲ್ಲದ ರೊಟ್ಟಿಯ ಹಬ್ಬ, ಪಂಚಾಶತ್ತಮ
ಹಬ್ಬ ಮತ್ತು ಪರ್ಣಶಾಲೆಗಳ ಹಬ್ಬದಲ್ಲಿ ಸೇರಿಬರಬೇಕು.
ಯೆಹೋವನ ಬಳಿಗೆ ಬರುವ ಪ್ರತಿಯೊಬ್ಬನು ಕಾಣಿಕೆ
ಯೊಂದಿಗೆ ಬರಬೇಕು. 17ಪ್ರತಿಯೊಬ್ಬನೂ
ಯೆಹೋವನು ತನ್ನನ್ನು ಆಶೀರ್ವದಿಸಿದ ಮೇರೆಗೆ ಆತನಿಗೆ
ಕಾಣಿಕೆಯನ್ನರ್ಪಿಸಬೇಕು.

### ನ್ಯಾಯಾಧಿಪತಿಗಳೂ ಅಧಿಕಾರಿಗಳೂ

18‘‘ನಿಮ್ಮ ದೇವರು ನಿಮಗೆ ಕೊಡುವ ದೇಶದ ಎಲ್ಲಾ
ಪಟ್ಟಣಗಳಲ್ಲಿ ನ್ಯಾಯಾಧೀಶರನ್ನೂ ಅಧಿಕಾರಿಗಳನ್ನೂ
ಆರಿಸಿಕೊಳ್ಳಿರಿ. ಪ್ರತಿಯೊಂದು ಕುಲದವರು ಇದನ್ನು
ಮಾಡಬೇಕು; ಆರಿಸಲ್ಪಟ್ಟವರು ನ್ಯಾಯವಂತರಾಗಿರ
ಬೇಕು. 19ನೀವು ಯಾವಾಗಲೂ ಪಕ್ಷಪಾತವಿಲ್ಲದವ
ರಾಗಿರಬೇಕು. ಜನರಿಂದ ಲಂಚ ತೆಗೆದುಕೊಂಡು
ಅನ್ಯಾಯವಾದ ತೀರ್ಮಾನ ಕೊಡಬಾರದು. ಹಣವು
ಜ್ಞಾನಿಗಳನ್ನು ಕುರುಡು ಮಾಡಿ ಅವರ ಬುದ್ಧಿಯನ್ನು
ಮಂದ ಮಾಡುವುದು. 20ನೀವು ಒಳ್ಳೆಯವರೂ ನ್ಯಾಯ
ವಂತರೂ ಆಗಿದ್ದರೆ ನಿಮ್ಮ ದೇವರಾದ ಯೆಹೋವನು
ನಿಮಗೆ ಕೊಡಲಿರುವ ದೇಶದಲ್ಲಿ ವಾಸಿಸುವಿರಿ ಮತ್ತು
ಅದನ್ನು ನಿಮ್ಮ ವಶದಲ್ಲಿಟ್ಟುಕೊಳ್ಳುವಿರಿ.

### ದೇವರು ವಿಗ್ರಹಗಳನ್ನು ದ್ವೇಷಿಸುವನು.

21‘‘ನೀವು ನಿಮ್ಮ ದೇವರಾದ ಯೆಹೋವನಿಗಾಗಿ
ಯಜ್ಞವೇದಿಕೆಯನ್ನು ಕಟ್ಟುವಾಗ ಅದರ ಪಕ್ಕದಲ್ಲಿ
ಅಶೇರ್ ದೇವತೆಗೆ ಗೌರವವನ್ನು ತರುವಂಥ ಯಾವ
ಮರದ ಕಂಬಗಳನ್ನು ನೆಡಬಾರದು; 22ಸುಳ್ಳು ದೇವರು
ಗಳ ಪೂಜೆಗಾಗಿ ವಿಶೇಷವಾದ ಕಲ್ಲುಗಳನ್ನು ನೆಡ
ಬಾರದು; ನಿಮ್ಮ ದೇವರಾದ ಯೆಹೋವನು ಅವುಗಳನ್ನು
ದ್ವೇಷಿಸುತ್ತಾನೆ.

### ಕಳಂಕ ದೋಷವಿಲ್ಲದ ಪ್ರಾಣಿಗಳನ್ನೇ ಬಲಿಕೊಡಿರಿ

17 ‘‘ನಿಮ್ಮ ದೇವರಾದ ಯೆಹೋವನಿಗೆ ನೀವು
ಪಶುಗಳನ್ನಾಗಲೀ ಆಡುಕುರಿಮರಿಗಳನ್ನಾಗಲೀ
ಸಮರ್ಪಿಸುವಾಗ ಅವು ಕಳಂಕವಿಲ್ಲದೆ ಪೂರ್ಣಾಂಗ
ವಾಗಿರಬೇಕು; ದೋಷಪೂರಿತ ಯಜ್ಞವನ್ನು ಆತನು
ದ್ವೇಷಿಸುತ್ತಾನೆ.

### ವಿಗ್ರಹಾರಾಧನೆ ಮಾಡಿದರೆ ದೊರಕುವ ಶಿಕ್ಷೆ

2‘‘ನಿಮ್ಮ ದೇವರಾದ ಯೆಹೋವನು ನಿಮಗೆ ಕೊಡುವ
ದೇಶದ ಒಂದು ಪಟ್ಟಣದಲ್ಲಿ ನೀವು ಕೆಟ್ಟ ಸುದ್ದಿ
ಯೊಂದನ್ನು ಅಂದರೆ ಒಬ್ಬ ಸ್ತ್ರೀಯಾಗಲೀ ಅಥವಾ
ಪುರುಷನಾಗಲೀ ದೇವರೊಂದಿಗೆ ಮಾಡಿದ ಒಡಂಬಡಿಕೆ
ಯನ್ನು ಮುರಿದು ಆತನಿಗೆ ವಿರುದ್ಧವಾಗಿ ಪಾಪ ಮಾಡಿ
3ಅವರು ಬೇರೆ ದೇವರುಗಳನ್ನಾಗಲೀ, ಸೂರ್ಯಚಂದ್ರ
ನಕ್ಷತ್ರಗಳನ್ನಾಗಲೀ ಪೂಜಿಸುತ್ತಾರೆ ಎಂಬ ಸುದ್ದಿಯನ್ನು
ನೀವು ಕೇಳಿದರೂ ಕೇಳಬಹುದು ಅದು ದೇವರ ಕಟ್ಟಳೆಗೆ
ವಿರುದ್ಧವಾದದ್ದು. 4ಇಂಥಾ ಕೆಟ್ಟ ಸುದ್ದಿಯನ್ನು ನೀವು
ಕೇಳಿದರೆ ಮೊಟ್ಟಮೊದಲಾಗಿ ಅದು ಸತ್ಯವೋ ಸುಳ್ಳೋ
ಎಂಬುದನ್ನು ಸರಿಯಾಗಿ ಪರಿಶೀಲಿಸಬೇಕು. ಅಂಥ
ಭಯಂಕರ ಸಂಗತಿಯು ಇಸ್ರೇಲಿನಲ್ಲಿ ಸಂಭವಿಸಿದ್ದು

ನಿಜವಾಗಿದ್ದಲ್ಲಿ, 5ಆ ಪಾಪಮಾಡಿದವನಿಗೆ ಶಿಕ್ಷೆಯನ್ನು
ವಿಧಿಸಬೇಕು. ಪಟ್ಟಣದ ಹೆಬ್ಬಾಗಿಲ ಹೊರಗಿರುವ ಬಯ
ಲಿಗೆ ಆ ತಪ್ಪು ಮಾಡಿದ ಸ್ತ್ರೀಯನ್ನೂ, ಪುರುಷನನ್ನೂ
ತೆಗೆದುಕೊಂಡು ಹೋಗಿ ಅಲ್ಲಿ ಅವರನ್ನು ಕಲ್ಲೆಸೆದು
ಸಾಯಿಸಬೇಕು. 6ಅವರು ವಿಗ್ರಹಾರಾಧನೆ ಮಾಡಿದ್ದಕ್ಕೆ
ಒಂದೇ ಸಾಕ್ಷಿ ಇರುವುದಾದರೆ ಅವರಿಗೆ ಮರಣ ಶಿಕ್ಷೆ
ಯಾಗ ಬಾರದು. ಆದರೆ ಇಬ್ಬರು ಅಥವಾ ಮೂವರು
ಸಾಕ್ಷಿಗಳು ಅವರ ವಿಗ್ರಹಾರಾಧನೆ ಮಾಡಿದ್ದು ಸತ್ಯವೆಂದು
ಹೇಳಿದರೆ ಮಾತ್ರ ಅವರನ್ನು ಸಾಯಿಸಬೇಕು. 7ಸತ್ಯವೆಂದು
ಹೇಳಿದ ಸಾಕ್ಷಿಗಳು ಮೊದಲು ಅವರ ಮೇಲೆ ಕಲ್ಲೆಸೆಯ
ಬೇಕು. ಅನಂತರ ಬೇರೆಯವರು ಕಲ್ಲೆಸೆದು ಅವರನ್ನು
ಸಾಯಿಸಬೇಕು. ಈ ರೀತಿಯಾಗಿ ನಿಮ್ಮ ಮಧ್ಯ ಇದ್ದ ದುಷ್ಕ
ೃತ್ಯವನ್ನು ತೆಗೆದುಹಾಕಬೇಕು.

### ನ್ಯಾಯಸ್ಥಾನದಲ್ಲಿ ಬಗೆಹರಿಸಲಾಗದ ವಿಷಯಗಳು

8‘‘ನಿಮ್ಮ ನ್ಯಾಯಸ್ಥಾನದಲ್ಲಿ ನ್ಯಾಯತೀರಿಸಲಾಗದ
ಕಷ್ಟದ ಸಮಸ್ಯೆಗಳು ಬರುವವು. ಅವು ಕೊಲೆ ಅಥವಾ
ಇಬ್ಬರ ಮಧ್ಯೆ ವಿವಾದವಿರಬಹುದು; ಅಥವಾ ಜಗಳ
ಮಾಡಿ ಗಾಯಗೊಂಡಿರುವ ಪ್ರಕರಣವಾಗಿರಬಹುದು.
ನಿಮ್ಮ ಪಟ್ಟಣಗಳ ನ್ಯಾಯಸ್ಥಾನದಲ್ಲಿ ಈ ಪ್ರಕರಣಗಳ
ವಿಚಾರಣೆ ನಡಿಸುವಾಗ ಸರಿಯಾದ ಇತ್ಯರ್ಥಮಾಡಿ
ತೀರ್ಪುಮಾಡಲು ಕಷ್ಟವಾದಲ್ಲಿ ನೀವು ದೇವರು ಆರಿಸುವ
ಸ್ಥಳಕ್ಕೆ ಹೋಗಬೇಕು. 9ಲೇವಿಕುಲದ ಯಾಜಕರ ಬಳಿಗೆ
ಹೋಗಿ ಅಲ್ಲಿ ಆ ಸಮಯದಲ್ಲಿರುವ ನ್ಯಾಯಾಧೀಶನನ್ನು
ಕಂಡು ಅವರಿಗೆ ವಿಷಯವನ್ನು ತಿಳಿಸಬೇಕು. ಅವರು ನಿಮ್ಮ
ಮುಂದಿರುವ ಬಗೆಹರಿಯಲಾಗದ ಪ್ರಕರಣವನ್ನು
ಆಲೈಸಿ, ವಿಚಾರಿಸಿ, 10ಯೆಹೋವನ ವಿಶೇಷವಾದ ಸ್ಥಳ
ದಲ್ಲಿ ತಮ್ಮ ತೀರ್ಪನ್ನು ಕೊಡುವರು. ಅವರು ಏನು ಹೇಳು
ತ್ತಾರೋ ಅದಕ್ಕೆ ಸಂಪೂರ್ಣವಾಗಿ ಒಪ್ಪಿಗೆ ನೀಡಬೇಕು.
ನೀವು ಏನು ಮಾಡಬೇಕೆಂದು ಅವರು ಹೇಳುತ್ತಾರೋ
ಅದನ್ನು ನೀವು ಮಾಡಲೇಬೇಕು. 11ಅವರು ಹೇಳಿದ
ಹಾಗೆ ಎಲ್ಲವನ್ನು ಅಕ್ಷರಶಃ ಪರಿಪಾಲಿಸಬೇಕು. ಅವರ
ತೀರ್ಪನ್ನು ಬದಲಾಯಿಸಬಾರದು.

12‘‘ನಿಮ್ಮ ದೇವರಾದ ಯೆಹೋವನ ಸೇವೆ ಮಾಡುತ್ತಿ
ರುವ ಯಾಜಕನಾಗಲೀ, ನ್ಯಾಯಾಧೀಶನಾಗಲೀ ಹೇಳಿದ
ತೀರ್ಪನ್ನು ಉಲ್ಲಂಘಿಸಿದವನಿಗೆ ಮರಣದಂಡನೆ ಆಗ
ಬೇಕು. ನೀವು ಆ ದುಷ್ಟನನ್ನು ಇಸ್ರೇಲಿನಿಂದ ನಿರ್ಮೂಲ
ಮಾಡಬೇಕು. 13ಈ ದಂಡನೆಯ ಬಗ್ಗೆ ಜನರು ಕೇಳಿ
ಭಯಪಟ್ಟು ಅಂಥ ಕೆಟ್ಟಕೃತ್ಯಗಳನ್ನು ಮಾಡದಿರುವರು.

### ಅರಸನನ್ನು ಆರಿಸುವ ರೀತಿ

14‘‘ನಿಮ್ಮ ದೇವರಾದ ಯೆಹೋವನು ನಿಮಗೆ
ಕೊಡುವ ದೇಶವನ್ನು ನೀವು ಪ್ರವೇಶಿಸುವಿರಿ. ಆ ಸ್ಥಳ
ಗಳನ್ನು ಸ್ವಾಧೀನಪಡಿಸಿಕೊಂಡು ಅಲ್ಲಿ ನೆಲೆಸುವಿರಿ. ಆಗ
ನೀವು ‘ನಮ್ಮ ಸುತ್ತಲಿನ ದೇಶದಲ್ಲಿರುವಂತೆಯೇ
ನಮಗೂ ಒಬ್ಬ ರಾಜನು ಬೇಕು’ ಎಂದು ಹೇಳುವಿರಿ.
15ಅಂಥಾ ಸಮಯದಲ್ಲಿ ಯೆಹೋವನು ಆರಿಸಿಕೊಂಡವ
ನನ್ನೇ ನೀವು ರಾಜನನ್ನಾಗಿ ಆರಿಸಿಕೊಳ್ಳಬೇಕು; ಅವನು
ನಿಮ್ಮ ಸ್ವಂತ ಜನರಲ್ಲಿ ಒಬ್ಬನಾಗಿರಬೇಕು; ಪರದೇಶಸ್ಥ
ನನ್ನು ನೀವು ನಿಮ್ಮ ರಾಜನನ್ನಾಗಿ ಆರಿಸಬಾರದು.
16ಅರಸನು ತನ್ನ ಉಪಯೋಗಕ್ಕಾಗಿ ಹೆಚ್ಚೆಚ್ಚಾಗಿ ಕುದುರೆ
ಗಳನ್ನು ಖರೀದಿಸಬಾರದು; ಜನರನ್ನು ಈಜಿಪ್ಟಿಗೆ ಕಳುಹಿಸಿ
ಅಲ್ಲಿಂದ ಹೆಚ್ಚು ಹೆಚ್ಚು ಕುದುರೆಗಳನ್ನು ತರಿಸಬಾರದು;
ಯಾಕಂದರೆ, ‘ನೀವು ಆ ಮಾರ್ಗದಲ್ಲಿ ಹಿಂದಕ್ಕೆ ಹೋಗ
ಲೇಬಾರದು’ ಎಂದು ಯೆಹೋವನು ಹೇಳಿದ್ದಾನೆ.
17ಅರಸನಿಗೆ ಮಿತಿ ಮೀರಿ ಪತ್ನಿಯರು ಇರಬಾರದು.
ಯಾಕಂದರೆ ಅವರು ಅರಸನನ್ನು ಯೆಹೋವನ ಮಾರ್ಗ
ದಲ್ಲಿ ನಡೆಯದಂತೆ ಮಾಡಿ ಬೇರೆ ಕಡೆಗೆ ತಿರುಗಿಸುವರು.
ರಾಜನು ಬೆಳ್ಳಿಬಂಗಾರಗಳನ್ನು ಶೇಖರಿಸಿ ತನ್ನನ್ನು
ಐಶ್ವರ್ಯವಂತನನ್ನಾಗಿ ಮಾಡಿಕೊಳ್ಳಬಾರದು.

18‘‘ರಾಜನು ರಾಜ್ಯವಾಳಲು ಆರಂಭಿಸುವಾಗ,
ಯಾಜಕರ ಮತ್ತು ಲೇವಿಯರ ಪುಸ್ತಕಗಳಿಂದ ಧರ್ಮ
ಶಾಸ್ತ್ರವನ್ನು ತನಗಾಗಿ ಪುಸ್ತಕರೂಪದಲ್ಲಿ ಬರೆಸಿಟ್ಟುಕೊಳ್ಳ
ಬೇಕು. 19ಅವನು ಆ ಪುಸ್ತಕವನ್ನು ತನ್ನೊಂದಿಗಿಟ್ಟು
ಕೊಂಡು ಅದನ್ನು ತನ್ನ ಜೀವಮಾನ ಪೂರ್ತಿ ಪದೇ ಪದೇ
ಓದುತ್ತಿರಬೇಕು. ಯಾಕಂದರೆ ಧರ್ಮಶಾಸ್ತ್ರವು ಆಜ್ಞಾಪಿ
ಸುವ ಪ್ರತಿಯೊಂದಕ್ಕೂ ಸಂಪೂರ್ಣವಾಗಿ ವಿಧೇಯ
ನಾಗಲೂ ಅವನು ಕಲಿತುಕೊಳ್ಳಬೇಕು. 20ಆಗ ಅರಸನು
ತನ್ನ ಪ್ರಜೆಗಳಿಗಿಂತ ತಾನು ಉತ್ತಮನಲ್ಲವೆಂದು ತಿಳಿದು
ಕೊಳ್ಳುವನು. ಆಗ ಅವನು ಧರ್ಮಶಾಸ್ತ್ರಕ್ಕೆ ವಿಮುಖ
ನಾಗದೆ ಅದನ್ನು ಚಾಚೂತಪ್ಪದೆ ಅನುಸರಿಸುವನು. ಆಗ
ರಾಜನೂ ಅವನ ಸಂತತಿಯವರೂ ಇಸ್ರೇಲ್ ರಾಜ್ಯವನ್ನು
ಬಹು ಕಾಲ ಆಳುವರು.

### ಯಾಜಕರು ಮತ್ತು ಲೇವಿಯರ ಜೀವನಾಧಾರ

18 ‘‘ಇಸ್ರೇಲ್ ದೇಶದೊಳಗೆ ಲೇವಿಕುಲದವರಿಗೆ
ಸ್ವಾಸ್ತ್ಯವು ಇರುವುದಿಲ್ಲ. ಅವರು ಯಾಜಕರಾಗಿ
ಸೇವೆ ಸಲ್ಲಿಸುವರು. ದೇವರಿಗೆ ಸಮರ್ಪಿಸಿದ ಕಾಣಿಕೆಗಳಲ್ಲಿ
ಬೆಂಕಿಯಲ್ಲಿ ಬೇಯಿಸಿದ ಯಜ್ಞಶೇಷವೇ ಅವರ ಆಹಾರ.
2ಬೇರೆ ಕುಲದವರಂತೆ ಅವರಿಗೆ ಭೂಮಿ ದೊರೆಯು
ವುದಿಲ್ಲ. ದೇವರು ಹೇಳಿದ ಪ್ರಕಾರ ಅವರ ಪಾಲು
ಯೆಹೋವನೇ.

3‘‘ನೀವು ಯಜ್ಞಕ್ಕಾಗಿ ಒಂದು ದನವನ್ನಾಗಲೀ ಕುರಿ
ಯನ್ನಾಗಲೀ ಕೊಯ್ದಾಗ ಯಾಜಕರಿಗೆ ಭುಜವನ್ನು
ಎರಡು ದವಡೆಗಳನ್ನು ಮತ್ತು ಉದರ ಭಾಗವನ್ನು

ಕೊಡಬೇಕು. [4]ನಿಮ್ಮ ಯಾಜಕರಿಗೆ ನಿಮ್ಮ ಬೆಳೆಯ ಪ್ರಥಮ ಫಲವನ್ನು ಕೊಡಬೇಕು. ನಿಮ್ಮ ಧಾನ್ಯಗಳ ಪ್ರಥಮ ಫಲವನ್ನು, ದ್ರಾಕ್ಷಾರಸದಲ್ಲಿ, ಎಣ್ಣೆಯಲ್ಲಿ ಮತ್ತು ನಿಮ್ಮ ಉಣ್ಣೆಯಲ್ಲಿ ಪ್ರಥಮ ಫಲವನ್ನು ಕೊಡಬೇಕು. [5]ಯಾಕಂದರೆ ನಿಮ್ಮ ದೇವರಾದ ಯೆಹೋವನು ಇಸ್ರೇಲ್ ಕುಲದವರಿಂದ ಲೇವಿಕುಲದವರನ್ನು ನಿರಂತರವಾಗಿ ಆತನ ಸೇವೆಮಾಡುವುದಕ್ಕೆ ಆರಿಸಿಕೊಂಡಿರುತ್ತಾನೆ.

[6]“ಪ್ರತಿಯೊಬ್ಬ ಲೇವಿಯನಿಗೂ ದೇವಾಲಯದಲ್ಲಿ ಸೇವೆಮಾಡಲು ಒಂದು ನಿರ್ದಿಷ್ಟ ಸಮಯವನ್ನು ಗೊತ್ತುಪಡಿಸಲಾಗಿದೆ. ಆದರೆ ಬೇರೆ ಸಮಯದಲ್ಲಿಯೂ ಸಹ ಅವನು ಅಲ್ಲಿ ಸೇವೆಮಾಡಲು ಇಷ್ಟಪಟ್ಟರೆ, ಅವನು ತನಗೆ ಇಷ್ಟಬಂದ ಸಮಯದಲ್ಲಿ ಸೇವೆ ಮಾಡಬಹುದು. ಇಸ್ರೇಲಿನ ಯಾವದೇ ಭಾಗದಲ್ಲಿರುವ ಯಾವುದೇ ಊರಿನಲ್ಲಿರುವ ಲೇವಿಯನು ತನ್ನ ಸ್ವಂತ ಸ್ಥಳವನ್ನು ಬಿಟ್ಟು ಯೆಹೋವನ ವಿಶೇಷ ಸ್ಥಳಕ್ಕೆ ಬರಬಹುದು. ಅವನು ತನಗೆ ಇಷ್ಟಬಂದ ಯಾವುದೇ ಸಮಯದಲ್ಲಿ ಬೇಕಾದರೂ ಹೀಗೆ ಮಾಡಬಹುದು. [7]ಯೆಹೋವನ ಸನ್ನಿಧಿಯಲ್ಲಿ ಸೇವೆಮಾಡುತ್ತಿರುವ ತನ್ನ ಎಲ್ಲಾ ಸಹೋದರರಾದ ಲೇವಿಯರಂತೆ ಈ ಲೇವಿಯನು ಸಹ ತನ್ನ ದೇವರಾದ ಯೆಹೋವನ ಹೆಸರಿನಲ್ಲಿ ಸೇವೆ ಮಾಡಬಹುದು. [8]ಆ ಲೇವಿಯನು ಇತರ ಲೇವಿಯರೊಂದಿಗೆ ಸಮಾನ ಪಾಲನ್ನು ಹೊಂದುವನು. ಇದಲ್ಲದೆ ಅವನ ಕುಟುಂಬದವರು ಯಥಾ ಪ್ರಕಾರ ತಮಗೆ ಬರತಕ್ಕ ಪಾಲನ್ನೂ ಹೊಂದುವರು.

## ಇತರ ಜನಾಂಗಗಳವರಂತೆ ಇಸ್ರೇಲರು ಜೀವಿಸಬಾರದು

[9]“ನೀವು ನಿಮ್ಮ ವಾಗ್ದತ್ತ ದೇಶಕ್ಕೆ ಬಂದಾಗ ಸುತ್ತಮುತ್ತಲಿನ ಜನರು ನಡೆಯುವ ರೀತಿಯಲ್ಲಿ ನೀವು ನಡೆಯಬಾರದು. ಅವರ ಅಸಹ್ಯವಾದ ಪದ್ಧತಿಗಳನ್ನು ಅನುಸರಿಸಬಾರದು. [10]ನಿಮ್ಮ ಗಂಡುಮಕ್ಕಳನ್ನಾಗಲೀ ಹೆಣ್ಣುಮಕ್ಕಳನ್ನಾಗಲೀ ನಿಮ್ಮ ಯಜ್ಞವೇದಿಕೆಯ ಬೆಂಕಿಯ ಮೇಲೆ ಅರ್ಪಿಸಬೇಡಿ. ನಿಮ್ಮ ಭವಿಷ್ಯವನ್ನು ತಿಳಿದುಕೊಳ್ಳುವುದಕ್ಕಾಗಿ ಕಣಿಹೇಳುವವರ ಬಳಿಗಾಗಲೀ, ಮಂತ್ರಗಾರರ ಬಳಿಗಾಗಲೀ, ಬೇತಾಳಿಕರ ಬಳಿಗಾಗಲೀ, ಮಾಟಗಾರರ ಬಳಿಗಾಗಲೀ ಹೋಗಬೇಡಿ. [11]ಬೇರೆಯವರ ಮೇಲೆ ಮಂತ್ರ ಮಾಡಲು ಯಾರಿಗೂ ಅವಕಾಶ ಕೊಡಬೇಡಿ. ಬೇತಾಳಿಕರಾಗುವುದಕ್ಕಾಗಲೀ ಮಾಟಗಾರರಾಗುವುದಕ್ಕಾಗಲೀ ನಿಮ್ಮಲ್ಲಿ ಯಾರಿಗೂ ಅವಕಾಶ ಕೊಡಬೇಡಿ. ಸತ್ತುಹೋದವನೊಡನೆ ನಿಮ್ಮಲ್ಲಿ ಯಾರೂ ಮಾತಾಡಕೂಡದು. [12]ಇಂಥ ಕಾರ್ಯಗಳನ್ನು ಮಾಡುವ ಜನರನ್ನು ದೇವರು ದ್ವೇಷಿಸುತ್ತಾನೆ. ಆದ್ದರಿಂದಲೇ ಆ ಜನಾಂಗಗಳವರನ್ನು ನಿಮಗೋಸ್ಕರವಾಗಿ ಈ ದೇಶದಿಂದ ಹೊರಡಿಸಿದನು. [13]ನಿಮ್ಮ ದೇವರಾದ ಯೆಹೋವನಿಗೆ ನೀವು ನಂಬಿಗಸ್ತರಾಗಿರಬೇಕು.

## ಯೆಹೋವನ ಮಾತುಗಳನ್ನು ತಿಳಿಸುವ ಪ್ರವಾದಿ

[14]“ನಿಮ್ಮ ದೇಶದೊಳಗಿಂದ ಇತರ ಜನಾಂಗದವರನ್ನು ನಾಶಮಾಡಬೇಕು. ಆ ಜನರು ಮಾಟಮಂತ್ರ ಮತ್ತು ಕಣಿಹೇಳುವುದರಿಂದ ತಮ್ಮ ಭವಿಷ್ಯವನ್ನು ವಿಚಾರಿಸುವರು. ಆದರೆ ನಿಮ್ಮ ದೇವರಾದ ಯೆಹೋವನು ಅಂಥಾ ಕೆಲಸವನ್ನು ಮಾಡಲು ನಿಮ್ಮನ್ನು ಬಿಡುವುದಿಲ್ಲ. [15]ನಿಮ್ಮ ದೇವರು ನಿಮ್ಮ ಬಳಿಗೆ ಪ್ರವಾದಿಯನ್ನು ಕಳುಹಿಸುವನು. ಆ ಪ್ರವಾದಿಯು ನಿಮ್ಮ ಕುಲದವರಲ್ಲಿ ಒಬ್ಬನಾಗಿರುವನು. ಅವನು ನನ್ನ ಹಾಗೆ ಇರುವನು ಮತ್ತು ನೀವು ಅವನ ಮಾತುಗಳನ್ನು ಕೇಳಬೇಕು. [16]ನೀವು ಕೇಳಿದ ಪ್ರಕಾರ ದೇವರು ನಿಮಗೊಬ್ಬ ಪ್ರವಾದಿಯನ್ನು ಕಳುಹಿಸುವನು. ನೀವು ಹೋರೇಬ್ (ಸೀನಾಯಿ) ಪರ್ವತದಲ್ಲಿ ಒಟ್ಟಾಗಿ ಸೇರಿದಾಗ ದೇವರ ಸ್ವರಕ್ಕೆ ಭಯಪಟ್ಟಿರಿ; ಪರ್ವತದಲ್ಲಿದ್ದ ಬೆಂಕಿಯನ್ನು ನೋಡಿಯೂ ತತ್ತರಿಸಿದಿರಿ. ಆಗ ನೀವು, ‘ ನಮ್ಮ ದೇವರಾದ ಯೆಹೋವನ ಸ್ವರವನ್ನು ನಾವು ತಿರುಗಿ ಕೇಳದ ಹಾಗೆ ಮಾಡು. ನಾವು ತಿರುಗಿ ಆ ಮಹಾ ಬೆಂಕಿಯ ಜ್ವಾಲೆಯನ್ನು ನೋಡದ ಹಾಗೆ ಮಾಡು; ಇಲ್ಲವಾದರೆ ನಾವು ಸಾಯುತ್ತೇವೆ!’ ಎಂದು ನನ್ನನ್ನು ಕೇಳಿಕೊಂಡಿರಿ.

[17]“ಆಗ ಯೆಹೋವನು ನನಗೆ ಹೇಳಿದ್ದೇನೆಂದರೆ, ‘ ಅವರು ಕೇಳುವ ವಿಷಯವು ಒಳ್ಳೆಯದೇ. [18]ನಾನು ಅವರಿಗಾಗಿ ನಿನ್ನ ತರಹದ ಒಬ್ಬ ಪ್ರವಾದಿಯನ್ನು ಕಳುಹಿಸುವೆನು. ಅವನು ಅವರ ಜನರಲ್ಲಿ ಒಬ್ಬವನಾಗಿರುವನು. ಅವನು ಜನರಿಗೆ ತಿಳಿಸಬೇಕಾದ ವಿಷಯವನ್ನು ನಾನೇ ಅವನಿಗೆ ತಿಳಿಸುವೆನು. ನಾನು ಆಜ್ಞಾಪಿಸುವುದೆಲ್ಲವನ್ನು ಅವನು ಜನರಿಗೆ ತಿಳಿಸುವನು. [19]ಈ ಪ್ರವಾದಿಯು ನನ್ನ ಪ್ರತಿನಿಧಿಯಾಗಿ ಮಾತನಾಡುವನು. ಅವನು ಮಾತಾಡುವಾಗ ಯಾವನಾದರೂ ನನ್ನ ಆಜ್ಞೆಗಳನ್ನು ಕೇಳದೆಹೋದರೆ ನಾನು ಅವನನ್ನು ಶಿಕ್ಷಿಸುವನು.’

## ಸುಳ್ಳು ಪ್ರವಾದಿಗಳನ್ನು ಕಂಡುಹಿಡಿಯುವ ಬಗ್ಗೆ

[20]“ಒಬ್ಬ ಪ್ರವಾದಿಯು ನಾನು ಹೇಳದ ಸಂಗತಿಯನ್ನು ನಿಮಗೆ ಹೇಳಿದರೂ ಹೇಳಬಹುದು. ದೇವರಿಂದ ಬಂದ ಸಂದೇಶವನ್ನು ನಿಮಗೆ ತಿಳಿಸುತ್ತಿರುವೆನು ಎಂದು ಅವನು ಹೇಳಬಹುದು. ಇಂಥಾ ಸಂದರ್ಭಗಳು ಬಂದಲ್ಲಿ ಆ ಪ್ರವಾದಿಯನ್ನು ಸಾಯಿಸಬೇಕು. ಇಷ್ಟು ಮಾತ್ರವಲ್ಲ ಇತರ ದೇವರುಗಳ ಸಂದೇಶವನ್ನು ಕೊಡುವ ಪ್ರವಾದಿಗಳೂ ಬರಬಹುದು. ಅವರನ್ನೂ ನೀವು ಸಾಯಿಸಬೇಕು. [21]‘ಆ ಪ್ರವಾದಿಯು ಹೇಳಿದ್ದು ದೇವರ ಮಾತಲ್ಲವೆಂದು ತಿಳಿದುಕೊಳ್ಳುವುದು ಹೇಗೆ? ಎಂದು ನೀವು ಅಂದುಕೊಳ್ಳಬಹುದು. [22]ಒಬ್ಬ ಪ್ರವಾದಿಯು ತಾನು ಯೆಹೋವನಿಂದ

ಕಳುಹಿಸಲ್ಪಟ್ಟವನು ಎಂದು ಹೇಳಿಕೊಂಡರೆ ಮತ್ತು ಅವನು ಹೇಳಿದ ಮಾತುಗಳು ನೆರವೇರದೆ ಹೋದರೆ ಆಗ ಆ ವಿಷಯಗಳನ್ನು ಯೆಹೋವನು ಹೇಳಲಿಲ್ಲವೆಂದು ನಿಮಗೆ ಗೊತ್ತಾಗುವುದು. ಆ ಪ್ರವಾದಿಯು ತನ್ನದೆ ಆದ ಆಲೋಚನೆಯನ್ನು ನಿಮಗೆ ಹೇಳುತ್ತಿದ್ದಾನೆಂದು ನಿಮಗೆ ತಿಳಿಯುವುದು. ನೀವು ಅವನಿಗೆ ಭಯಪಡಬೇಡಿರಿ.

## ಆಶ್ರಯನಗರಗಳು

19 ‘ಬೇರೆ ಜನಾಂಗಗಳು ವಾಸಿಸುವ ದೇಶವನ್ನು ನಿಮ್ಮ ದೇವರು ನಿಮಗೆ ಕೊಡುತ್ತಿದ್ದಾನೆ. ಆ ಜನಾಂಗಗಳನ್ನು ಆತನು ನಾಶಮಾಡುತ್ತಾನೆ. ಅವರು ವಾಸಿಸುತ್ತಿದ್ದ ಸ್ಥಳಗಳಲ್ಲಿ ನೀವು ವಾಸಿಸುವಿರಿ. ಅವರ ಮನೆಗಳನ್ನೂ ಪಟ್ಟಣಗಳನ್ನೂ ನೀವು ವಶಪಡಿಸಿಕೊಳ್ಳುವಿರಿ. ಅಂಥಾ ಸಮಯದಲ್ಲಿ 2-3ನಿಮ್ಮ ದೇಶವನ್ನು ನೀವು ಮೂರು ವಿಭಾಗ ಮಾಡಬೇಕು. ಪ್ರತಿಯೊಂದು ವಿಭಾಗದಲ್ಲಿ ನೀವು ಒಂದು ನಗರವನ್ನು ಆರಿಸಬೇಕು. ಅದು ಎಲ್ಲಾ ಜನರಿಗೆ ಹೋಗಲು ಅನುಕೂಲವಾಗಿರಬೇಕು. ಅದಕ್ಕಾಗಿ ನೀವು ರಸ್ತೆಗಳನ್ನು ಮಾಡಬೇಕು. ಆಗ ಯಾವನಾದರೂ ಅಪ್ಪಿತಪ್ಪಿ ಇನ್ನೊಬ್ಬನನ್ನು ಕೊಂದರೆ ಅವನು ರಕ್ಷಣೆಗಾಗಿ ಆ ನಗರಗಳಿಗೆ ಓಡಿ ಹೋಗಬಹುದು.

4‘‘ಅಂಥಾ ಮನುಷ್ಯನಿಗೆ ಅನ್ವಯಿಸುವ ನಿಯಮಗಳು ಯಾವುವೆಂದರೆ; ಆ ಮನುಷ್ಯನು ಇನ್ನೊಬ್ಬನನ್ನು ಕೊಂದದ್ದು ಆಕಸ್ಮಿಕವಾಗಿರಬೇಕು; ಕೊಲ್ಲಲ್ಪಟ್ಟವನ ಮೇಲೆ ಅವನಿಗೆ ದ್ವೇಷವಿರಬಾರದು. 5ಇದೊಂದು ಉದಾಹರಣೆ: ಒಬ್ಬನು ಇನ್ನೊಬ್ಬ ವ್ಯಕ್ತಿಯೊಂದಿಗೆ ಅಡವಿಗೆ ಕಟ್ಟಿಗೆ ಕಡಿಯಲು ಹೋಗುತ್ತಾನೆ. ಒಂದು ಮರವನ್ನು ಕಡಿಯಲು ತನ್ನ ಕೊಡಲಿಯನ್ನು ಬೀಸುವಾಗ ಅವನ ಕೊಡಲಿಯು ಕಾವುನಿಂದ ಕಳಚಿಕೊಂಡು ಪಕ್ಕದಲ್ಲಿ ನಿಂತಿದ್ದವನಿಗೆ ಬಡಿದು ಅವನು ಸಾವಿಗೆ ಕಾರಣವಾದರೆ, ಕೊಡಲಿಯನ್ನು ಬೀಸಿದವನು ಆ ಮೂರು ನಗರಗಳಲ್ಲಿ ಒಂದರಲ್ಲಿ ಆಶ್ರಯವನ್ನು ಪಡೆದುಕೊಂಡು ಸುರಕ್ಷಿತವಾಗಿರಬಹುದು. 6ಆದರೆ ಆ ನಗರವು ತುಂಬಾ ದೂರವಿದ್ದಲ್ಲಿ ಅವನು ಅಲ್ಲಿಗೆ ಸೇರುವ ಮೊದಲೇ ಸತ್ತವನ ಹತ್ತಿರದ ಸಂಬಂಧಿ ಅವನನ್ನು ಹಿಂಬಾಲಿಸಿ ಅವನ ಮೇಲೆ ಮುಯ್ಯಿತೀರಿಸಿಕೊಳ್ಳುವನು. ಅವನ ಮೇಲೆ ಕೋಪಗೊಂಡು ಅವನನ್ನು ಕೊಂದರೆ ನಿಷ್ಕಾರಣವಾಗಿ ಅವನು ಕೊಲ್ಲಲ್ಪಟ್ಟಂತಾಯಿತು. ಯಾಕಂದರೆ ಸತ್ತವನನ್ನು ಅವನು ದ್ವೇಷಿಸುತ್ತಿರಲಿಲ್ಲ. 7ಆದುದರಿಂದ ಆ ನಗರಗಳು ಎಲ್ಲರಿಗೂ ಸುಲಭವಾಗಿ ಸೇರುವಂಥವುಗಳಾಗಿರಬೇಕು; ಅಂಥವುಗಳನ್ನು ನೀವು ಆರಿಸಿಕೊಳ್ಳಬೇಕು.

8‘‘ದೇವರಾದ ಯೆಹೋವನು ನಿಮ್ಮ ಪೂರ್ವಿಕರಿಗೆ ನಿಮ್ಮ ದೇಶವನ್ನು ವಿಸ್ತಾರ ಮಾಡುವುದಾಗಿ ವಾಗ್ದಾನ ಮಾಡಿದನು. ಅವರಿಗೆ ಕೊಡುವುದಾಗಿ ವಾಗ್ದಾನ ಮಾಡಿದ ದೇಶವನ್ನೆಲ್ಲಾ ನಿಮಗೆ ಕೊಡುವನು. 9ಈ ಹೊತ್ತು ನಾನು ನಿಮಗೆ ಕೊಡುವ ಆಜ್ಞೆಗಳಿಗೆ ನೀವು ವಿಧೇಯರಾದರೆ ಮಾತ್ರ ನಿಮ್ಮ ದೇಶವನ್ನು ಆತನು ವಿಸ್ತರಿಸುವನು. ನೀವು ನಿಮ್ಮ ದೇವರಾದ ಯೆಹೋವನನ್ನು ಯಾವಾಗಲೂ ಪ್ರೀತಿಸಬೇಕು. ದೇವರು ನಿಮ್ಮ ದೇಶದ ಮೇರೆಯನ್ನು ವಿಸ್ತರಿಸಿದಾಗ ನೀವು ಇನ್ನೂ ಮೂರು ಆಶ್ರಯ ನಗರಗಳನ್ನು ಆರಿಸಿಕೊಳ್ಳಬೇಕು. 10ಆಗ ಯೆಹೋವನು ನಿಮಗೆ ಕೊಡಲಿರುವ ದೇಶದಲ್ಲಿ ಅಂಥ ನಿರಪರಾಧಿಗಳು ಕೊಲ್ಲಲ್ಪಡುವುದಿಲ್ಲ; ನೀವು ಯಾವ ಮರಣದ ವಿಷಯದಲ್ಲಿಯೂ ದೋಷಿಗಳಾಗಿರುವುದಿಲ್ಲ.

11‘‘ಆದರೆ ಒಬ್ಬನು ಇನ್ನೊಬ್ಬ ವ್ಯಕ್ತಿಯನ್ನು ದ್ವೇಷಿಸಿದರೆ ಅವನನ್ನು ಉದ್ದೇಶಪೂರ್ವಕವಾಗಿ ಕೊಂದು ಆಶ್ರಯ ನಗರದೊಳಗೆ ಸುರಕ್ಷಿತನಾಗಿದ್ದಲ್ಲಿ 12ಅವನ ಊರಿನ ಹಿರಿಯರು ಅವನನ್ನು ಆ ಆಶ್ರಯನಗರದೊಳಗಿಂದ ಹಿಡಿದು ತಂದು ಕೊಲೆ ಮಾಡಲ್ಪಟ್ಟವನ ಸಮೀಪಬಂಧುವಿಗೆ ಒಪ್ಪಿಸಬೇಕು. ಕೊಲೆಗಾರನು ಸಾಯಲೇಬೇಕು. 13ನೀವು ಅವನ ವಿಷಯದಲ್ಲಿ ದುಃಖಪಡಬಾರದು. ಯಾಕಂದರೆ ಅವನು ನಿರಪರಾಧಿಯನ್ನು ಕೊಂದ ಅಪರಾಧಿಯಾಗಿದ್ದಾನೆ. ಅವನು ಮಾಡಿದ ಪಾಪವನ್ನು ಇಸ್ರೇಲಿನಿಂದ ತೆಗೆದುಹಾಕಬೇಕು. ಆಗ ನಿಮಗೆ ಶುಭವಾಗುವುದು.

## ಆಸ್ತಿಯ ಮೇರೆಗಳು

14‘‘ನಿಮ್ಮ ನೆರೆಯವನ ಭೂಮಿಯ ಗಡಿಕಲ್ಲುಗಳ ಸ್ಥಳವನ್ನು ನೀವು ಬದಲಾಯಿಸಬಾರದು. ಹಿಂದಿನ ಕಾಲದಲ್ಲಿ ಜನರು ತಮ್ಮ ಭೂಮಿಯ ಮೇರೆಯನ್ನು ಗುರುತಿಸಲು ನೆಟ್ಟಿರುತ್ತಾರೆ. ಆ ಗಡಿಕಲ್ಲುಗಳು ನಿಮ್ಮ ದೇವರಾದ ಯೆಹೋವನು ನಿಮಗೆ ಕೊಟ್ಟಿರುವ ಆ ಭೂಮಿಗೆ ಗುರುತಾಗಿದೆ.

## ಸಾಕ್ಷಿಗಳು

15‘‘ಒಬ್ಬನು ಕಟ್ಟಳೆಗಳಿಗೆ ವಿರುದ್ಧವಾಗಿ ನಡೆದುಕೊಂಡು ಅಪಾದಿಸಲ್ಪಟ್ಟಿದ್ದಲ್ಲಿ ಒಬ್ಬನ ಸಾಕ್ಷಿಯಿಂದ ಅವನು ತಪ್ಪಿತಸ್ಥನೆಂದು ತೀರ್ಮಾನಿಸಬಾರದು. ಅವನು ತಪ್ಪಿತಸ್ಥನೆಂದು ತೋರಿಸಲು ಎರಡು ಅಥವಾ ಮೂರು ಸಾಕ್ಷಿಗಳಿರಬೇಕು.

16‘‘ಒಬ್ಬ ಸಾಕ್ಷಿದಾರನು ಇನ್ನೊಬ್ಬನು ತನಗೆ ಹಾನಿ ಮಾಡಿದ್ದಾನೆಂದು ಸುಳ್ಳುಹೇಳಿ ಅವನನ್ನು ಶಿಕ್ಷೆಗೆ ಒಳಪಡಿಸಲು ಪ್ರಯತ್ನಿಸಿದಾಗ 17ಆ ಪ್ರಕರಣಕ್ಕೆ ಸೇರಿದವರಿಬ್ಬರೂ ಯೆಹೋವನು ಆರಿಸಿದ ಸ್ಥಳಕ್ಕೆ ಹೋಗಿ ಅಲ್ಲಿ ಕಾರ್ಯತತ್ಪರರಾಗಿರುವ ಯಾಜಕರನ್ನು ಮತ್ತು ನ್ಯಾಯದೀಶರನ್ನು ಕಾಣಬೇಕು. 18ನ್ಯಾಯಧೀಶರು ಅವರನ್ನು

ಪ್ರಶ್ನಿಸಿ ಸರಿಯಾಗಿ ವಿಚಾರಿಸಬೇಕು. ಸಾಕ್ಷಿಯವನು ಸುಳ್ಳು ಹೇಳಿದ್ದಾನೆಂಬುದನ್ನು ಅವರು ಕಂಡುಹಿಡಿದರೆ 19ಆ ಸಾಕ್ಷಿಯವನಿಗೆ ಶಿಕ್ಷೆ ವಿಧಿಸಬೇಕು. ತನ್ನ ವಿರೋಧಿಗೆ ಯಾವ ಶಿಕ್ಷೆ ಬರಬೇಕೆಂಬುದಾಗಿ ಅವನು ಸುಳ್ಳಾಡಿದ್ದನೋ, ಅದೇ ಶಿಕ್ಷೆಯನ್ನು ಅವನಿಗೆ ವಿಧಿಸಬೇಕು. ಈ ರೀತಿಯಾಗಿ ಆ ದುಷ್ಟತನವನ್ನು ನಿಮ್ಮ ಕುಲಗಳಿಂದ ತೆಗೆದುಹಾಕಬೇಕು. 20ಇದನ್ನು ಬೇರೆಯವರು ಕೇಳಿ ಭಯಪಟ್ಟು ಅಂಥಾ ದುಷ್ಟಕಾರ್ಯವನ್ನು ಅವರು ಮಾಡುವುದಿಲ್ಲ.

21‘‘ಅಪರಾಧ ಎಷ್ಟು ಭಯಂಕರವಾಗಿರುವುದೋ ಅಷ್ಟೇ ಭಯಂಕರ ಶಿಕ್ಷೆಯೂ ಇರಬೇಕು. ತಪ್ಪು ಮಾಡಿದವನನ್ನು ಶಿಕ್ಷಿಸಲು ಬೇಸರಪಟ್ಟುಕೊಳ್ಳಬಾರದು. ಒಬ್ಬನು ಪ್ರಾಣಹತ್ಯೆ ಮಾಡಿದರೆ ಅವನ ಪ್ರಾಣವೂ ತೆಗೆಯಲ್ಪಡಬೇಕು. ಕಣ್ಣಿಗೆ ಕಣ್ಣು, ಹಲ್ಲಿಗೆ ಹಲ್ಲು, ಕೈಗೆ ಕೈ, ಕಾಲಿಗೆ ಕಾಲು ಎಂಬ ನೀತಿಯನ್ನು ಅನುಸರಿಸಬೇಕು.

## ಯುದ್ಧಕ್ರಮಗಳು

20 ‘‘ನೀವು ನಿಮಗಿಂತ ಬಲಿಷ್ಠರಾದ ವೈರಿಗಳ ಮೇಲೆ ಯುದ್ಧಕ್ಕೆ ಹೋದಾಗ ಅವರ ರಥಾಶ್ವಗಳನ್ನು ಮತ್ತು ನಿಮಗಿಂತಲೂ ಹೆಚ್ಚಾದ ಸೈನ್ಯಬಲವನ್ನು ನೋಡಿ ನೀವು ಭಯಗ್ರಸ್ತರಾಗಬೇಡಿರಿ. ನಿಮ್ಮ ದೇವರಾದ ಯೆಹೋವನು ನಿಮ್ಮೊಂದಿಗಿದ್ದಾನೆ. ನಿಮ್ಮನ್ನು ಈಜಿಪ್ಟಿನಿಂದ ಬಿಡಿಸಿ ತಂದವನು ಆತನೇ.

2‘‘ನೀವು ಯುದ್ಧಕ್ಕೆ ಹೊರಟುನಿಂತಾಗ ಯಾಜಕನು ಸೈನಿಕರ ಬಳಿಗೆ ಹೋಗಿ ಹೀಗೆ ಹೇಳಬೇಕು: 3‘ಇಸ್ರೇಲ್ ಜನರೇ, ನನ್ನ ಮಾತನ್ನು ಆಲಿಸಿರಿ. ಈ ದಿವಸ ನಿಮ್ಮ ವೈರಿಗಳೊಂದಿಗೆ ಕಾದಾಡಲು ಹೋಗುತ್ತಿದ್ದೀರಿ. ನೀವು ಅಧೈರ್ಯಗೊಳ್ಳಬೇಡಿರಿ. ಗಲಿಬಿಲಿಗೆ ಸಿಕ್ಕಿಕೊಳ್ಳಬೇಡಿ; ವೈರಿಗಳಿಗೆ ಭಯಪಡಬೇಡಿರಿ. 4ನಿಮ್ಮ ದೇವರಾದ ಯೆಹೋವನು ನಿಮ್ಮ ಮುಂದೆ ಹೋಗುವನು. ವೈರಿಗಳೊಂದಿಗೆ ಯುದ್ಧಮಾಡಲು ಆತನು ನಿಮಗೆ ಸಹಾಯ ಮಾಡುವನು ಮತ್ತು ನಿಮಗೆ ಜಯವನ್ನು ಕೊಡುವನು.’

5‘‘ಆ ಲೇವಿಯ ಅಧಿಕಾರಿಗಳು ಸೈನಿಕರಿಗೆ, ‘ನಿಮ್ಮಲ್ಲಿ ಯಾರಾದರೂ ಹೊಸಮನೆಯನ್ನು ಕಟ್ಟಿ ಗೃಹಪ್ರವೇಶ ಮಾಡಿರದಿದ್ದರೆ ಅವನು ತನ್ನ ಮನೆಗೆ ಹೋಗಲಿ. ಒಂದುವೇಳೆ ಅವನು ರಣರಂಗದಲ್ಲಿ ಸತ್ತರೆ ಇನ್ನೊಬ್ಬನು ಅವನ ಮನೆಗೆ ಸೇರಿಕೊಳ್ಳಬಹುದು. 6ನಿಮ್ಮಲ್ಲಿ ಯಾವನಾದರೂ ದ್ರಾಕ್ಷಾತೋಟವನ್ನು ಮಾಡಿ ಅದರ ಫಲವನ್ನು ಕೂಡಿಸಿಲ್ಲದಿದ್ದರೆ ಅವನು ತನ್ನ ಮನೆಗೆ ಹೋಗಲಿ. ಅವನು ರಣರಂಗದಲ್ಲಿ ಮಡಿದರೆ ಅವನ ದ್ರಾಕ್ಷಾತೋಟದ ಫಲಗಳು ಬೇರೊಬ್ಬನ ಪಾಲಾಗುವುದು. 7ನಿಮ್ಮಲ್ಲಿ ಯಾರಾದರೂ ಮದುವೆಯಾಗಲು ಹೆಣ್ಣನ್ನು ನಿಶ್ಚಯಿಸಿದ್ದರೆ ಅವನು ತನ್ನ ಮನೆಗೆ ಹಿಂತಿರುಗಿಹೋಗಲಿ; ಯಾಕಂದರೆ ಅವನು ರಣರಂಗದಲ್ಲಿ ಮಡಿದರೆ ಅವನಿಗೆ ನಿಶ್ಚಯವಾದ ಹೆಣ್ಣನ್ನು ಇನ್ನೊಬ್ಬನು ಮದುವೆ ಮಾಡಿಕೊಳ್ಳಬಹುದು’ ಎಂದು ಹೇಳುವರು.

8‘‘ಆ ಲೇವಿಯ ಅಧಿಕಾರಿಗಳು ಹೇಳಬೇಕಾದದ್ದೇನೆಂದರೆ: ’ನಿಮ್ಮಲ್ಲಿ ಯಾರಾದರೂ ತಮ್ಮ ಧೈರ್ಯವನ್ನು ಕಳೆದುಕೊಂಡಿದ್ದರೆ ಅವನು ತನ್ನ ಮನೆಗೆ ಹೋಗಲಿ. ಅವನಿಂದಾಗಿ ಇತರ ಸೈನಿಕರೂ ತಮ್ಮ ಧೈರ್ಯವನ್ನು ಕಳೆದುಕೊಳ್ಳಬಹುದು.’ 9ಲೇವಿಯ ಅಧಿಕಾರಿಗಳು ಸೈನಿಕರೊಂದಿಗೆ ಮಾತಾಡುವುದನ್ನು ನಿಲ್ಲಿಸಿದ ಬಳಿಕ ಅವರು ತಮಗೆ ಸೈನ್ಯಾಧಿಕಾರಿಗಳನ್ನು ನೇಮಿಸಬೇಕು.

10‘‘ನೀವು ಒಂದು ಪಟ್ಟಣವನ್ನು ಆಕ್ರಮಿಸಲು ಹೋದಾಗ, ಅಲ್ಲಿಯ ಜನರಿಗೆ ‘ಶಾಂತಿಸಂಧಾನ’ಕ್ಕೆ ಕರೆಯನ್ನು ಕೊಡಬೇಕು. 11ಅವರು ನಿಮ್ಮ ಸಂಧಾನವನ್ನು ಸ್ವೀಕರಿಸಿ ನಿಮಗೆ ತಮ್ಮ ಬಾಗಿಲುಗಳನ್ನು ತೆರೆದುಕೊಟ್ಟರೆ ಆ ಪಟ್ಟಣದಲ್ಲಿರುವವರೆಲ್ಲರೂ ನಿಮಗೆ ಗುಲಾಮರಾಗುವರು. ಅವರು ನಿಮ್ಮ ಕೆಲಸಗಳನ್ನು ಮಾಡಲೇಬೇಕು. 12ಆದರೆ ಆ ಪಟ್ಟಣದವರು ನಿಮ್ಮೊಂದಿಗೆ ಶಾಂತಿ ಸಂಧಾನ ಮಾಡಲು ಒಪ್ಪದೇಹೋದಲ್ಲಿ ಮತ್ತು ನಿಮ್ಮೊಂದಿಗೆ ಕಾದಾಡಲು ಬಂದಲ್ಲಿ ನೀವು ಆ ಪಟ್ಟಣಕ್ಕೆ ಮುತ್ತಿಗೆ ಹಾಕಬೇಕು. 13ನಿಮ್ಮ ದೇವರಾದ ಯೆಹೋವನು ಆ ಪಟ್ಟಣವನ್ನು ಸ್ವಾಧೀನ ಮಾಡಲು ಸಹಾಯಮಾಡಿದಾಗ ನೀವು ಆ ಪಟ್ಟಣದೊಳಗಿದ್ದ ಗಂಡಸರನ್ನೆಲ್ಲಾ ಕೊಂದುಬಿಡಬೇಕು. 14ಹೆಂಗಸರನ್ನು, ಮಕ್ಕಳನ್ನು, ದನಕುರಿಗಳನ್ನು ಮತ್ತು ಪಟ್ಟಣದೊಳಗಿದ್ದವುಗಳನ್ನೆಲ್ಲಾ ನಿಮ್ಮ ಸ್ವಂತ ಉಪಯೋಗಕ್ಕಾಗಿ ತೆಗೆದುಕೊಳ್ಳಬಹುದು. ನಿಮ್ಮ ದೇವರಾದ ಯೆಹೋವನು ಅವುಗಳನ್ನು ನಿಮಗೆ ಕೊಟ್ಟಿದ್ದಾನೆ. 15ನಿಮ್ಮಿಂದ ಬಹುದೂರವಿರುವ ಪಟ್ಟಣಗಳಿಗೆ ಅಂದರೆ ನೀವು ವಾಸಿಸಲಿರುವ ದೇಶದಿಂದ ದೂರವಿರುವ ಪಟ್ಟಣಗಳಿಗೆ ನೀವು ಆ ರೀತಿಯಾಗಿ ಮಾಡಬೇಕು.

16‘‘ಆದರೆ ನಿಮಗೆ ವಾಗ್ದಾನ ಮಾಡಿದ ದೇಶದ ಪಟ್ಟಣಗಳನ್ನು ಸ್ವಾಧೀನ ಮಾಡುವಾಗ ನೀವು ಪಟ್ಟಣದಲ್ಲಿರುವವರೆಲ್ಲರನ್ನು ಕೊಲ್ಲಬೇಕು. 17ನೀವು ಹಿತ್ತೀಯರನ್ನು, ಅಮೋರಿಯರನ್ನು, ಕಾನಾನ್ಯರನ್ನು, ಪೆರಿಜ್ಜೀಯರನ್ನು, ಹಿವ್ವಿಯರನ್ನು ಮತ್ತು ಯೆಬೂಸಿಯರನ್ನು ಸಂಪೂರ್ಣವಾಗಿ ಹತ್ಯೆ ಮಾಡಬೇಕು. ಇದು ನಿಮ್ಮ ದೇವರಾದ ಯೆಹೋವನ ಅಪ್ಪಣೆ. 18ಯಾಕಂದರೆ ಆಗ ಅವರು ನಿಮ್ಮ ದೇವರಾದ ಯೆಹೋವನಿಗೆ ವಿರೋಧವಾಗಿ ಪಾಪ ಮಾಡುವಂತೆ ನಿಮಗೆ ಉಪದೇಶಿಸಲು ಸಾಧ್ಯವಾಗುವುದಿಲ್ಲ; ಅವರು ತಮ್ಮ ದೇವರುಗಳನ್ನು ಪೂಜಿಸುವಾಗ ಮಾಡುವ ಭಯಂಕರ ಕೃತ್ಯಗಳನ್ನು ನಿಮಗೆ ಉಪದೇಶಿಸಲು ಸಾಧ್ಯವಾಗುವುದಿಲ್ಲ.

19‘‘ನೀವು ಒಂದು ಪಟ್ಟಣವನ್ನು ಬಹುಕಾಲದಿಂದ
ಮುತ್ತಿಗೆ ಹಾಕಿದರೆ ಸುತ್ತಮುತ್ತಲಿರುವ ಮರಗಳನ್ನು
ಕಡಿದುಹಾಕಬಾರದು. ಅವುಗಳ ಫಲಗಳನ್ನು ತಿನ್ನ
ಬಹುದು; ಆದರೆ ಕಡಿಯಬಾರದು. ಅವು ನಿಮ್ಮ ವೈರಿಗಳ
ಲ್ಲವಲ್ಲಾ? ಅವು ನಿಮ್ಮೊಂದಿಗೆ ಯುದ್ಧ ಮಾಡುವುದಿಲ್ಲ
ವಲ್ಲಾ? 20ಹಣ್ಣುಗಳನ್ನು ಕೊಡದ ಮರಗಳನ್ನು ಕಡಿಯ
ಬಹುದು. ಆ ಮರಗಳಿಂದ ಆಯುಧಗಳನ್ನು ತಯಾರಿಸಿ*
ಆ ಪಟ್ಟಣದ ಜನರೊಂದಿಗೆ ಯುದ್ಧ ಮಾಡಬಹುದು. ಆ
ಪಟ್ಟಣವು ನಿಮ್ಮ ಕೈವಶವಾಗುವ ತನಕ ನೀವು ಅದನ್ನು
ಉಪಯೋಗಿಸಬಹುದು.

## ಕೊಲೆಯಾದ ವ್ಯಕ್ತಿಯ ದೇಹ ಪತ್ತೆಯಾದರೆ

21 ‘‘ನಿಮ್ಮ ದೇವರಾದ ಯೆಹೋವನು ನಿಮಗೆ
ಕೊಡುವ ದೇಶದಲ್ಲಿ ಒಬ್ಬ ವ್ಯಕ್ತಿ ಕೊಲೆಯಾಗಿ
ಹೊಲದಲ್ಲಿ ಬಿದ್ದಿರುವುದನ್ನು ನೀವು ಕಂಡರೆ ಮತ್ತು ಅವ
ನನ್ನು ಕೊಲೆಮಾಡಿದ್ದು ಯಾರು ಎಂದು ನಿಮಗೆ ಗೊತ್ತಿಲ್ಲ
ದಿದ್ದರೆ 2ಆಗ ಆ ಪಟ್ಟಣದ ನಾಯಕರು ಮತ್ತು ನ್ಯಾಯಾ
ದೀಶರು ಬಂದು ಪಟ್ಟಣಕ್ಕೂ ಆ ಶವದ ಸ್ಥಳಕ್ಕೂ ಎಷ್ಟು
ದೂರವಿದೆ ಎಂದು ಅಳೆಯಬೇಕು. 3ಯಾವ ಪಟ್ಟಣವು
ಕೊಲೆಯಾದ ವ್ಯಕ್ತಿಯ ಶವಕ್ಕೆ ಹತ್ತಿರವಾಗಿದೆಯೋ ಆ
ಪಟ್ಟಣದ ನಾಯಕರು ಮತ್ತು ನ್ಯಾಯಾಧೀಶರು ತಮ್ಮ
ಹಟ್ಟಿಯಿಂದ ಎಂದೂ ಕರು ಈಯದ, ಕೆಲಸಕ್ಕೆ ಉಪ
ಯೋಗಿಸದ ಒಂದು ಹಸುವನ್ನು ತೆಗೆದುಕೊಂಡು 4ಹರಿ
ಯುವ ನೀರಿರುವ ತಗ್ಗಿಗೆ ಅಟ್ಟಿಕೊಂಡು ಹೋಗಬೇಕು.
ಆ ತಗ್ಗು ಉಳಿಮೆ ಮಾಡಿದ ಜಾಗವಾಗಿರಬಾರದು ಮತ್ತು
ಆ ಸ್ಥಳದಲ್ಲಿ ಯಾವ ಸಸಿಯೂ ನೆಟ್ಟಿರಬಾರದು. ಅಲ್ಲಿ
ಊರ ಹಿರಿಯರು ಆ ಹಸುವಿನ ಕುತ್ತಿಗೆ ಮುರಿಯಬೇಕು.
5ಊರಿನಲ್ಲಿದ್ದ ಲೇವಿಯರೂ ಅಲ್ಲಿಗೆ ಹೋಗಬೇಕು.
ಯೆಹೋವನು ಅವರ ಜನರನ್ನು ಆತನ ಹೆಸರಿನಲ್ಲಿ
ಆಶೀರ್ವದಿಸುವುದಕ್ಕಾಗಿಯೂ ತನ್ನ ಸೇವೆ ಮಾಡುವುದ
ಕ್ಕಾಗಿಯೂ ಆರಿಸಿದ್ದಾನೆ. ಎಲ್ಲಾ ವಾಗ್ವಾದಗಳನ್ನು ಯಾಜ
ಕನೇ ಇತ್ಯರ್ಥಮಾಡುವನು. 6ಕೊಲೆಯಾದವನ ದೇಹದ
ಸಮೀಪವಿರುವ ಪಟ್ಟಣದ ಹಿರಿಯರು ಕುತ್ತಿಗೆ ಮುರಿಯ
ಲ್ಪಟ್ಟ ಹಸುವಿನ ಮೇಲೆ ತಮ್ಮ ತಮ್ಮ ಕೈಗಳನ್ನು ತೊಳೆಯ
ಬೇಕು. 7ಆ ಹಿರಿಯರು ಹೀಗೆನ್ನಬೇಕು, ‘ನಾವು ಈ ವ್ಯಕ್ತಿ
ಯನ್ನು ಹತ್ಯೆ ಮಾಡಲಿಲ್ಲ ಮತ್ತು ಅವನು ಕೊಲೆ ಮಾಡ
ಲ್ಪಟ್ಟದನ್ನು ನಾವು ನೋಡಿಲ್ಲ 8ಯೆಹೋವನೇ, ನೀನು
ಇಸ್ರೇಲನ್ನು ರಕ್ಷಿಸಿರುವೆ ನಾವು ನಿನ್ನ ಜನಗಳಾಗಿದ್ದೇವೆ.
ಈಗ ನೀನು ನಮ್ಮನ್ನು ಶುದ್ಧೀಕರಿಸು; ನಿರ್ದೋಷಿಯ
ಕೊಲೆಗೆ ನಮ್ಮನ್ನು ಕಾರಣರನ್ನಾಗಿ ಮಾಡಬೇಡ!’ 9ಹೀಗೆ
ನೀವು ಯೆಹೋವನ ದೃಷ್ಟಿಯಲ್ಲಿ ಸರಿಯಾದದ್ದನ್ನು
ಮಾಡಿ ನಿಮ್ಮ ಸಮೂಹದಿಂದ ದೋಷವನ್ನು ತೆಗೆದು
ಹಾಕುವಿರಿ.

## ಯುದ್ಧದಲ್ಲಿ ಸೆರೆಹಿಡಿಯಲ್ಪಟ್ಟ ಸ್ತ್ರೀಯರು

10‘‘ನೀವು ನಿಮ್ಮ ಶತ್ರುಗಳೊಂದಿಗೆ ಯುದ್ಧಮಾಡಿ
ದೇವರ ಸಹಾಯದಿಂದ ಅವರನ್ನು ಸೋಲಿಸುವಿರಿ. ನೀವು
ನಿಮ್ಮ ಶತ್ರುಗಳನ್ನು ಸೆರೆಹಿಡಿದು ಕೊಂಡೊಯ್ಯುವಿರಿ.
11ಸೆರೆಹಿಡಿಯಲ್ಪಟ್ಟವರಲ್ಲಿ ಸುಂದರಿಯಾದ ಸ್ತ್ರೀಯನ್ನು
ನೋಡಿ ಆಕೆಯನ್ನು ನಿನ್ನ ಹೆಂಡತಿಯನ್ನಾಗಿ ತೆಗೆದು
ಕೊಳ್ಳಬಯಸಿದರೆ. 12ಆಕೆಯನ್ನು ನಿನ್ನ ಮನೆಯೊಳಗೆ
ಕರೆದುಕೊಂಡು ಬರಬೇಕು. ಆಕೆಯು ತಲೆಯನ್ನು
ಬೋಳಿಸಿಕೊಂಡು ಉಗುರನ್ನು ಕತ್ತರಿಸಿಕೊಳ್ಳಬೇಕು.
13ಆಕೆಯು ತನ್ನ ಸೆರೆವಾಸದ ಬಟ್ಟೆಯನ್ನು ತೆಗೆದಿಟ್ಟು
ಒಂದು ತಿಂಗಳು ಪೂರ್ತಿ ತನ್ನ ತಂದೆತಾಯಿಗಳಿಗಾಗಿ
ಶೋಕಿಸಬೇಕು. ಅನಂತರ ನೀನು ಆಕೆಯ ಬಳಿಗೆ ಹೋಗಿ
ಆಕೆಯನ್ನು ವರಿಸಿ ಗಂಡನಾಗಬಹುದು. ಆಕೆಯು ನಿನ್ನ
ಹೆಂಡತಿಯಾಗುವಳು. 14ಆಕೆಯನ್ನು ನೀನು ಮೆಚ್ಚದಿದ್ದರೆ
ವಿವಾಹ ವಿಚ್ಛೇದನೆ ಮಾಡಿ ಆಕೆಯನ್ನು ಸ್ವತಂತ್ರಳಾಗು
ವಂತೆ ಬಿಟ್ಟುಬಿಡಬಹುದು. ಆದರೆ ನೀನು ಆಕೆಯನ್ನು
ಮಾರಬಾರದು. ಆಕೆಯನ್ನು ಗುಲಾಮಳಂತೆ ನೋಡ
ಬಾರದು. ಯಾಕಂದರೆ ನೀನು ಆಕೆಯೊಂದಿಗೆ ಲೈಂಗಿಕ
ಸಂಬಂಧವನ್ನಿಟ್ಟುಕೊಂಡಿದ್ದಿಯಲ್ಲಾ?

## ಹಿರಿಯ ಮಗನು

15‘‘ಒಬ್ಬ ಮನುಷ್ಯನಿಗೆ ಇಬ್ಬರು ಹೆಂಡತಿಯರಿದ್ದರೆ
ಅವರಲ್ಲಿ ಒಬ್ಬಾಕೆಯನ್ನು ಅವನು ಹೆಚ್ಚಾಗಿ ಪ್ರೀತಿಸಿದರೂ
ಪ್ರೀತಿಸಬಹುದು. ಆ ಇಬ್ಬರು ಅವನಿಗೆ ಮಕ್ಕಳನ್ನು ಹೆರು
ವರು. ಹಿರಿಮಗನು ತಾನು ಪ್ರೀತಿಸಿದ ಹೆಂಡತಿಯಲ್ಲಿ
ಹುಟ್ಟಿದರೆ 16ಆ ಮನುಷ್ಯನು ತನ್ನ ಆಸ್ತಿಯನ್ನು ತನ್ನ
ಮಕ್ಕಳಿಗೆ ಪಾಲುಮಾಡಿಕೊಡುವಾಗ ಚೊಚ್ಚಲಮಗನಿಗೆ
ಸಿಗಬೇಕಾದ ಆಸ್ತಿಯನ್ನು ತಾನು ಪ್ರೀತಿಸುವ ಹೆಂಡತಿಯ
ಮಗನಿಗೆ ಕೊಡಬಾರದು. 17ತಾನು ಪ್ರೀತಿಸದೆ ಇರುವ
ಹೆಂಡತಿಯ ಚೊಚ್ಚಲಮಗನನ್ನು ಅವನು ಸ್ವೀಕರಿಸ
ಬೇಕು. ಆ ಚೊಚ್ಚಲಮಗನಿಗೆ ಬೇರೆ ಮಕ್ಕಳಿಗಿಂತ ಎರಡು
ಪಾಲು ಆಸ್ತಿಯನ್ನು ಕೊಡಬೇಕು. ಯಾಕಂದರೆ ಅವನು
ನಿಮ್ಮ ಚೊಚ್ಚಲ ಮಗನು. ಚೊಚ್ಚಲ ಮಗನ ಹಕ್ಕು
ಅವನಿಗೆ ಸೇರಿದ್ದು.

## ವಿಧೇಯರಾಗದ ಮಕ್ಕಳ ಬಗ್ಗೆ

18‘‘ಒಬ್ಬ ಮನುಷ್ಯನಿಗೆ ಹಠಮಾರಿಯಾದ ಅವಿಧೇಯ
ಮಗನಿರಬಹುದು. ಈ ಮಗನು ತಂದೆಯ ಮಾತ

---

**ಆಯುಧಗಳನ್ನು ತಯಾರಿಸಿ** ಅಕ್ಷರಶಃ, ‘‘ಪಟ್ಟಣಕ್ಕೆ ವಿರೋಧವಾಗಿ ಮುತ್ತಿಗೆ ಹಾಕಲು ಬೇಕಾದ ಮರದ ಉಪಕರಣಗಳನ್ನು ಶೇಖರಿಸಿಟ್ಟು ಕೊಳ್ಳಬಹುದು.’’

ನ್ನಾಗಲೀ ತಾಯಿಯ ಮಾತನ್ನಾಗಲೀ ಕೇಳದವನಾಗಿದ್ದರೆ
ಅವನಿಗೆ ಅವರು ಶಿಕ್ಷೆ ಕೊಟ್ಟರೂ ಅವನು ಅವರಿಗೆ
ವಿಧೇಯನಾಗದಿದ್ದರೆ; ಅವರ ಮಾತುಗಳನ್ನು ಕೇಳದಿ
ದ್ದರೆ, 19ಆಗ ಆವನ ತಂದೆತಾಯಿಗಳು ಆ ಮಗನನ್ನು
ಪಟ್ಟಣದ ಹಿರಿಯರು ಸೇರಿಬರುವ ಸ್ಥಳಕ್ಕೆ ಕರೆದು
ಕೊಂಡು ಹೋಗಿ. 20ಪಟ್ಟಣದ ಹಿರಿಯರಿಗೆ ಹೀಗೆ ಹೇಳ
ಬೇಕು: ‘ನಮ್ಮ ಮಗನು ಹಠಮಾರಿಯೂ ಅವಿಧೇ
ಯನೂ ಆಗಿರುತ್ತಾನೆ. ನಾವು ಹೇಳಿದ ಮಾತುಗಳ
ನ್ನೊಂದೂ ಅವನು ಕೇಳುವುದಿಲ್ಲ. ಅವನು ಬಹಳವಾಗಿ
ತಿಂದು ಕುಡಿಯುತ್ತಾನೆ.’ 21ಆಗ ಆ ಪಟ್ಟಣದ ಜನರು
ಸೇರಿ ಆ ಮಗನನ್ನು ಕಲ್ಲೆಸೆದು ಕೊಲ್ಲಬೇಕು. ಹೀಗೆ
ನಿಮ್ಮಲ್ಲಿರುವ ದುಷ್ಟತನವನ್ನು ತೆಗೆದುಹಾಕಬೇಕು. ಎಲ್ಲಾ
ಇಸ್ರೇಲರು ಇದನ್ನು ಕೇಳಿ ಭಯಗ್ರಸ್ತರಾಗುವರು.

### ಅಪರಾಧಿಗಳನ್ನು ಕೊಂದು ನೇತು ಹಾಕುವ ಬಗ್ಗೆ

22‘‘ಒಬ್ಬ ಮನುಷ್ಯನು ಮರಣಶಿಕ್ಷೆಗೆ ಯೋಗ್ಯವಾದ
ಅಪರಾಧವನ್ನು ಮಾಡಿದ್ದಿರಬಹುದು. ಅವನಿಗೆ ಮರಣ
ಶಿಕ್ಷೆ ಕೊಟ್ಟನಂತರ ಅವನ ದೇಹವನ್ನು ಒಂದು ಮರಕ್ಕೆ
ತೂಗುಹಾಕಿದರೆ 23ಇಡೀ ರಾತ್ರಿ ಆ ಮರದಲ್ಲಿ ಅವನ
ಶರೀರ ನೇತಾಡುವಂತೆ ಮಾಡಬಾರದು. ಅದೇ ದಿವಸ
ದಲ್ಲಿ ಅವನ ಶವವು ಹೂಳಲ್ಪಡಬೇಕು. ಯಾಕಂದರೆ ಮರ
ದಲ್ಲಿ ತೂಗುಹಾಕಲ್ಪಟ್ಟ ಮನುಷ್ಯನು ದೇವರಿಂದ ಶಪಿಸಲ್ಪ
ಟ್ಟವನು. ನಿಮ್ಮ ದೇವರಾದ ಯೆಹೋವನು ನಿಮಗೆ ಕೊಟ್ಟ
ದೇಶವನ್ನು ನೀವು ಹೊಲಸು ಮಾಡಬೇಡಿರಿ.

### ಇತರ ಕಟ್ಟಳೆಗಳು

22 ‘‘ನಿಮ್ಮ ನೆರೆಯವನ ಕಟ್ಟಿರುವ ದನವಾಗಲೀ
ಕುರಿಯಾಗಲೀ ಹಗ್ಗ ಬಿಚ್ಚಿಕೊಂಡಿರುವುದನ್ನು
ನೀವು ಕಂಡರೆ ಅದನ್ನು ನಿರ್ಲಕ್ಷಿಸದೆ ಕೂಡಲೇ ಅದನ್ನು
ಅದರ ಧಣಿಯ ಬಳಿಗೆ ಅಟ್ಟಿಕೊಂಡು ಹೋಗಬೇಕು. 2ಆ
ಪಶುವಿನ ಧಣಿ ಯಾರೆಂದು ನಿಮಗೆ ಗೊತ್ತಾಗದಿದ್ದರೆ
ಅಥವಾ ಅವನು ನಿಮಗೆ ತುಂಬಾ ದೂರದಲ್ಲಿದ್ದರೆ ಅದರ
ಧಣಿಯು ಅದನ್ನು ಹುಡುಕಿಕೊಂಡು ಬರುವ ತನಕ ನೀವು
ಪಶುವನ್ನು ನಿಮ್ಮ ಮನೆಯಲ್ಲಿ ಇಟ್ಟುಕೊಳ್ಳಬೇಕು.
ಅವನು ಬಂದಾಗ ಅದನ್ನು ಹಿಂದಿರುಗಿಸಬೇಕು. 3ನಿಮ್ಮ
ನೆರೆಯವನ ಕತ್ತೆಯಾಗಲೀ, ಅವನ ಬಟ್ಟೆಯಾಗಲೀ
ಕತ್ತೆಯ ವಿಷಯದಲ್ಲಿಯೂ ಬಟ್ಟೆಯ ವಿಷಯದಲ್ಲಿಯೂ
ಇದೇ ನಿಯಮ ಅನ್ವಯಿಸುತ್ತದೆ.

4‘‘ನಿಮ್ಮ ನೆರೆಯವನ ಕತ್ತೆಯಾಗಲೀ ಹಸುವಾಗಲೀ
ದಾರಿಯಲ್ಲಿ ಬಿದ್ದಿರುವುದನ್ನು ನೋಡಿದರೂ ನೋಡ
ದಂತೆ ಹೋಗದೆ ಅದಕ್ಕೆ ಏಳಲು ಸಹಾಯಮಾಡಬೇಕು.

5‘‘ಹೆಂಗಸು ಗಂಡಸರ ಬಟ್ಟೆ ಧರಿಸಿಕೊಳ್ಳಬಾರದು,
ಗಂಡಸು ಹೆಂಗಸರ ಬಟ್ಟೆ ಧರಿಸಬಾರದು. ಇದು
ಯೆಹೋವನ ದೃಷ್ಟಿಯಲ್ಲಿ ಅಸಹ್ಯ.

6‘‘ನೀವು ದಾರಿಯಲ್ಲಿ ಹೋಗುತ್ತಿರುವಾಗ ನೆಲದ
ಮೇಲಾಗಲೀ ಮರದಲ್ಲಿಯಾಗಲೀ ಗೂಡುಕಟ್ಟಿಕೊಂಡು
ಅದರೊಳಗೆ ತಾಯಿ ಪಕ್ಷಿಯು ತನ್ನ ಮೊಟ್ಟೆಗಳೊಂದಿಗೆ
ಇಲ್ಲವೆ ಮರಿಗಳೊಂದಿಗೆ ಇರುವುದನ್ನು ಕಂಡಾಗ ನೀವು
ಮರಿಗಳೊಂದಿಗೆ ತಾಯಿಪಕ್ಷಿಯನ್ನು ಹಿಡಿದು
ಕೊಂಡೊಯ್ಯಬಾರದು. 7ನೀವು ತಾಯಿ ಪಕ್ಷಿಯನ್ನು
ಬಿಟ್ಟು ಮರಿಪಕ್ಷಿಗಳನ್ನು ಕೊಂಡೊಯ್ಯಬಹುದು. ಈ
ನಿಯಮಗಳನ್ನು ನೀವು ಪಾಲಿಸಿದರೆ ನೀವು ಬಹುಕಾಲ
ಬದುಕುವಿರಿ ಮತ್ತು ನಿಮಗೆ ಶುಭವಾಗುವುದು.

8‘‘ನೀವು ಮನೆಕಟ್ಟುವಾಗ ಅದರ ಮೇಲ್ಛಾವಣಿಯ
ಸುತ್ತಲೂ ಅರ್ಧಗೋಡೆಯನ್ನು ಕಟ್ಟಬೇಕು. ಹೀಗೆ
ಮಾಡದೆ ಹೋದರೆ ಯಾರಾದರೂ ಮೇಲ್ಛಾವಣಿಯಿಂದ
ಕೆಳಗೆ ಬಿದ್ದು ಸತ್ತಲ್ಲಿ ಅವನ ಸಾವಿಗೆ ನೀವು ಕಾರಣ
ರಾಗುವಿರಿ.

9‘‘ನೀವು ಧಾನ್ಯವನ್ನು ಮತ್ತು ದ್ರಾಕ್ಷಾಲತೆಗಳನ್ನು
ಒಂದೇ ಹೊಲದಲ್ಲಿ ಬೆಳೆಸಬಾರದು. ಯಾಕಂದರೆ
ಅವೆರಡೂ ಚೆನ್ನಾಗಿ ಬೆಳೆಯದೆ ಫಲ ಕೊಡದೆ
ಹೋಗುವುದು.

10‘‘ಕತ್ತೆಯನ್ನೂ ಹಸುವನ್ನೂ ಒಟ್ಟಿಗೆ ನೊಗಕ್ಕೆ ಕಟ್ಟಿ ನೆಲ
ಉಳಬಾರದು.

11‘‘ನಾರುಮಡಿಯನ್ನು ಉಣ್ಣೆಯನ್ನು ಮಿಶ್ರವಾಗಿ
ನೇಯ್ದ ಬಟ್ಟೆಯನ್ನೂ ತೊಡಬಾರದು.

12‘‘ನೂಲಿನಿಂದ (ದಾರಗಳಿಂದ) ಮಾಡಿದ ಗೊಂಡೆ
ಗಳನ್ನು ನಿಮ್ಮ ನಿಲುವಂಗಿಗಳ ನಾಲ್ಕು ಮೂಲೆಗಳಿಗೆ
ಕಟ್ಟಬೇಕು.

### ಮದುವೆಗೆ ಸಂಬಂಧಿಸಿದ ಕಟ್ಟಳೆಗಳು

13‘‘ಒಬ್ಬ ಪುರುಷನು ಒಬ್ಬ ಸ್ತ್ರೀಯನ್ನು ಮದುವೆಯಾಗಿ
ಆಕೆಯೊಂದಿಗೆ ಲೈಂಗಿಕ ಸಂಬಂಧವನ್ನಿಟ್ಟುಕೊಂಡಿದ್ದು
ಆಮೇಲೆ ಆಕೆಯನ್ನು ಇಷ್ಟಪಡದೆ, 14‘ನಾನು ಈಕೆಯನ್ನು
ಮದುವೆಯಾದಾಗ ಈಕೆಯು ಕನ್ಯೆಯಲ್ಲವೆಂದು ನನಗೆ
ತಿಳಿದುಬಂತು’ ಎಂದು ಸುಳ್ಳು ಹೇಳಿ ಜನರಿಗೆ ಆಕೆಯ
ಮೇಲೆ ಸುಳ್ಳು ಅಪರಾಧ ಹೊರಿಸಿದರೆ. 15ಹುಡುಗಿಯ
ತಂದೆತಾಯಿಗಳು ಊರಿನ ಹಿರಿಯರ ಮುಂದೆ ಆಕೆಯು
ಕನ್ನಿಕೆಯಾಗಿದ್ದಳೆಂದು ರುಜುವಾತುಪಡಿಸಬೇಕು.
16ಹುಡುಗಿಯ ತಂದೆಯು ಹಿರಿಯರಿಗೆ, ‘ನನ್ನ ಮಗಳನ್ನು
ಇವನಿಗೆ ಹೆಂಡತಿಯನ್ನಾಗಿ ಕೊಟ್ಟೆನು. ಆದರೆ ಈಗ
ಅವನು ಆಕೆಯನ್ನು ದ್ವೇಷಿಸಿ ಬೇಡವೆನ್ನುತ್ತಾನೆ. 17ಅವನು
ನನ್ನ ಮಗಳ ವಿಷಯದಲ್ಲಿ ಸುಳ್ಳು ಹೇಳುತ್ತಿದ್ದಾನೆ.

‘ಆಕೆಯಲ್ಲಿ ಕನ್ನಿಕೆಯ ಗುರುತು ಇರಲಿಲ್ಲ’ ಎಂದು ಹೇಳುತ್ತಿದ್ದಾನೆ, ಆದರೆ ನನ್ನ ಮಗಳು ಮದುವೆಗಿಂತ ಮುಂಚೆ ಪುರುಷ ಸಂಪರ್ಕ ಮಾಡಲಿಲ್ಲವೆಂಬುದಕ್ಕೆ ಇದೇ ಗುರುತು’ ಎಂದು ಹೇಳಿ ರಕ್ತದ ಕಲೆಗಳಿರುವ ಬಟ್ಟೆಯನ್ನು ತೋರಿಸಬೇಕು. 18 ಆಗ ಊರಿನ ಹಿರಿಯರು ಆ ಮನುಷ್ಯನಿಗೆ ಶಿಕ್ಷೆ ವಿಧಿಸಬೇಕು. 19 ಹಿರಿಯರು ಅವನಿಂದ ನಲವತ್ತು ತೊಲೆ ಬೆಳ್ಳಿಯನ್ನು ಹುಡುಗಿಯ ತಂದೆಗೆ ಕೊಡಿಸಬೇಕು. ಯಾಕಂದರೆ ಒಂದು ಇಸ್ರೇಲಿನ ಹುಡುಗಿಗೆ ಅವನು ಅವಮಾನಪಡಿಸಿದ ಕಾರಣ ಆ ಹುಡುಗಿಯು ಅವನ ಹೆಂಡತಿಯಾಗಿಯೇ ಬಾಳಬೇಕು. ಅವನು ಆಕೆಯನ್ನು ಎಂದಿಗೂ ವಿವಾಹವಿಚ್ಛೇದನೆ ಮಾಡಬಾರದು,

20 “ಆದರೆ ಹುಡುಗಿಯ ಗಂಡನು ಆಕೆಯ ಬಗ್ಗೆ ಹೇಳಿದ್ದು ಸತ್ಯವಾಗಿದ್ದರೆ, ಹುಡುಗಿಯ ತಂದೆತಾಯಂದಿರ ಬಳಿ ಆಕೆಯು ಪುರುಷ ಸಂಪರ್ಕವಿಲ್ಲದವಳಾಗಿದ್ದಳು ಎಂಬುದಕ್ಕೆ ಪುರಾವೆ ಇಲ್ಲದಿದ್ದಲ್ಲಿ 21 ಊರಹಿರಿಯರು ಆ ಹುಡುಗಿಯನ್ನು ಆಕೆಯ ತಂದೆಯ ಮನೆಬಾಗಿಲಿಗೆ ತರಬೇಕು. ಅಲ್ಲಿ ಊರ ಜನರು ಆಕೆಯನ್ನು ಕಲ್ಲೆಸೆದು ಸಾಯಿಸಬೇಕು. ಯಾಕಂದರೆ ಆಕೆಯು ಇಸ್ರೇಲಿನಲ್ಲಿ ನಾಚಿಕೆಕರವಾದ ಕೃತ್ಯವನ್ನು ನಡೆಸಿದ್ದಾಳೆ; ತನ್ನ ತಂದೆಯ ಮನೆಯಲ್ಲಿದ್ದುಕೊಂಡು ವೇಶ್ಯಾವೃತ್ತಿ ನಡಿಸಿದ್ದಾಳೆ. ಅಂಥಾ ಪಾಪವನ್ನು ನೀವು ನಿಮ್ಮ ಮಧ್ಯದಿಂದ ತೆಗೆದುಹಾಕಬೇಕು.

### ಲೈಂಗಿಕ ಪಾಪಕೃತ್ಯಗಳು

22 “ಒಬ್ಬ ಮನುಷ್ಯನು ಇನ್ನೊಬ್ಬ ಮನುಷ್ಯನ ಹೆಂಡತಿಯ ಜೊತೆಗೆ ಲೈಂಗಿಕ ಸಂಬಂಧವನ್ನಿಟ್ಟದ್ದರೆ ಅವರಿಬ್ಬರನ್ನೂ ಸಾಯಿಸಬೇಕು. ಆ ಕೆಡುಕನ್ನು ನೀವು ಇಸ್ರೇಲಿನಿಂದ ತೆಗೆದುಹಾಕಬೇಕು.

23 “ಒಬ್ಬನು ಇನ್ನೊಬ್ಬನಿಗೆ ನಿಶ್ಚಿತಾರ್ಥವಾದ ಕನ್ನಿಕೆಯೊಬ್ಬಳನ್ನು ಸಂಧಿಸಿ ಅವಳನ್ನು ಕೂಡಿದರೆ, 24 ನಗರದ ಬಾಗಿಲಿನ ಬಳಿಯಿರುವ ಸಾರ್ವಜನಿಕ ಸ್ಥಳಕ್ಕೆ ನೀವು ಅವರಿಬ್ಬರನ್ನು ಕರೆದುಕೊಂಡು ಬಂದು ಅವರಿಬ್ಬರನ್ನೂ ಕಲ್ಲೆಸೆದು ಕೊಲ್ಲಬೇಕು. ನೀವು ಆ ಪುರುಷನನ್ನೂ ಕೊಲ್ಲಬೇಕು. ಏಕೆಂದರೆ ಅವನು ಮತ್ತೊಬ್ಬನ ಹೆಂಡತಿಯನ್ನು ಲೈಂಗಿಕವಾಗಿ ಹಿಂಸಿಸಿದನು. ನೀವು ಆ ಸ್ತ್ರೀಯನ್ನು ಕೊಲ್ಲಬೇಕು; ಯಾಕಂದರೆ ಆಕೆಯು ನಗರದಲ್ಲಿದ್ದರೂ ಸಹಾಯಕ್ಕಾಗಿ ಕೂಗಿಕೊಳ್ಳಲಿಲ್ಲ. ಆ ಕೆಡುಕನ್ನು ನೀವು ನಿಮ್ಮ ಜನರಿಂದ ತೆಗೆದುಹಾಕಬೇಕು.

25 “ಆದರೆ ಒಬ್ಬನು ಮತ್ತೊಬ್ಬನಿಗೆ ನಿಶ್ಚಿತಾರ್ಥವಾಗಿರುವ ಕನ್ಯೆಯೊಬ್ಬಳನ್ನು ಹೊಲದಲ್ಲಿ ಕಂಡು ಆಕೆಯನ್ನು ಬಲಾತ್ಕಾರವಾಗಿ ಕೂಡಿದರೆ, ಅವನನ್ನು ಮಾತ್ರ ಕೊಲ್ಲಬೇಕು. 26 ಆ ಹುಡುಗಿಗೆ ನೀವು ಏನನ್ನೂ ಮಾಡಬಾರದು. ಆಕೆ ಶಿಕ್ಷೆಗೆ ಅರ್ಹಳಾಗುವಂಥ ಕಾರ್ಯವೇನೂ ಮಾಡಲಿಲ್ಲ. ಒಬ್ಬನು ತನ್ನ ಸ್ನೇಹಿತನ ಮೇಲೆ ಆಕ್ರಮಣ ಮಾಡಿ ಕೊಂದಂತೆಯಷ್ಟೇ. 27 ಆ ಮನುಷ್ಯನು ನಿಶ್ಚಿತಾರ್ಥವಾದ ಹುಡುಗಿಯನ್ನು ಹೊಲದಲ್ಲಿ ಒಬ್ಬಳೇ ಇರುವುದನ್ನು ಕಂಡು ಆಕೆಯ ಮೇಲೆ ಬಿದ್ದನು. ಆಕೆಯು ಸಹಾಯಕ್ಕಾಗಿ ಕೂಗಿಕೊಂಡಾಗ ಸಹಾಯ ಮಾಡಲು ಹತ್ತಿರದಲ್ಲಿ ಯಾರೂ ಇರಲಿಲ್ಲ. ಆದುದರಿಂದ ಆಕೆಯು ಶಿಕ್ಷಿಸಲ್ಪಡಬಾರದು.

28 “ಒಬ್ಬನು ನಿಶ್ಚಿತಾರ್ಥವಾಗಿಲ್ಲದ ಒಬ್ಬ ಕನ್ನಿಕೆಯನ್ನು ಕಂಡು ಆಕೆಯನ್ನು ಬಲಾತ್ಕಾರದಿಂದ ಕೂಡುವುದನ್ನು ಬೇರೆಯವರು ಕಂಡರೆ 29 ಅವನು ಹುಡುಗಿಯ ತಂದೆಗೆ ಇಪ್ಪತ್ತು ತೊಲ ಬೆಳ್ಳಿಯನ್ನು ಕೊಟ್ಟು ಆಕೆಯನ್ನು ತನ್ನ ಹೆಂಡತಿಯನ್ನಾಗಿ ತೆಗೆದುಕೊಳ್ಳಬೇಕು. ಅವನು ಆಕೆಯನ್ನು ಮದುವೆಗಿಂತ ಮುಂಚೆ ಕೂಡಿದ್ದರಿಂದ ಅವನು ಆಕೆಯನ್ನು ಎಂದಿಗೂ ಬಿಟ್ಟುಬಿಡಬಾರದು.

30 “ಒಬ್ಬನು ತನ್ನ ತಂದೆಯ ಹೆಂಡತಿಯನ್ನು ಕೂಡಿ ತಂದೆಗೆ ಅವಮಾನ ಮಾಡಬಾರದು.”

### ಇಸ್ರೇಲರ ದೇವಾರಾಧನೆಗೆ ಯೋಗ್ಯರಾದವರು

23 “ಜನನಾಂಗದ ಬೀಜವನ್ನು ಹೊಡಿಸಿ ಕೊಂಡವನಾಗಲೀ ಜನನಾಂಗದ ಒಂದು ಭಾಗವನ್ನು ಕತ್ತರಿಸಿಕೊಂಡವನಾಗಲೀ ಇಸ್ರೇಲ್ ಜನರೊಂದಿಗೆ ದೇವಾರಾಧನೆ ಮಾಡಬಾರದು. 2 ಒಬ್ಬನ ತಂದೆತಾಯಿಗಳು ಕಾನೂನುಬದ್ಧವಾಗಿ ಮದುವೆಯಾಗಿಲ್ಲದಿದ್ದರೆ, ಅವನು ದೇವಾರಾಧನೆಯಲ್ಲಿ ಇಸ್ರೇಲರೊಡನೆ ಸೇರಕೂಡದು. ಅವನ ಸಂತತಿಯವರು ಹತ್ತನೆಯ ತಲೆಮಾರಿನ ತನಕ ಇಸ್ರೇಲ್ ಸಮೂಹದೊಂದಿಗೆ ಆರಾಧನೆ ಮಾಡಬಾರದು.

3 “ಅಮ್ಮೋನಿಯನಾಗಲೀ ಮೋವಾಬ್ಯನಾಗಲೀ ಇಸ್ರೇಲರೊಂದಿಗೆ ಸೇರಿ ದೇವಾರಾಧನೆ ಮಾಡಕೂಡದು. ಅವರ ಸಂತತಿಯ ಹತ್ತನೆಯ ತಲೆಮಾರಿನವರೆಗೂ ಆರಾದನೆ ಮಾಡಬಾರದು. 4 ಯಾಕಂದರೆ ಅವರು ಈಜಿಪ್ಟಿನಿಂದ ಹೊರಟುಬಂದು ಪ್ರಯಾಣದಲ್ಲಿದ್ದಾಗ ಅವರಿಗೆ ರೊಟ್ಟಿಯನ್ನಾಗಲೀ ನೀರನ್ನಾಗಲೀ ಕೊಡಲು ನಿರಾಕರಿಸಿದ್ದರು. ಅವರು ಮೆಸೆಪೊಟೊಮಿಯದಿಂದ ಬಿಳಾಮನನ್ನು ಕರೆಸಿ ಇಸ್ರೇಲರನ್ನು ಶಪಿಸುವಂತೆ ಬಲವಂತಪಡಿಸಿದರು. 5 ಆದರೆ ಯೆಹೋವನು ನಿಮ್ಮನ್ನು ಪ್ರೀತಿಸುತ್ತಿದುದರಿಂದ ಆ ಶಾಪವನ್ನು ನಿಮಗೆ ಆಶೀರ್ವಾದವಾಗಿ ಪರಿವರ್ತಿಸಿದನು. 6 ಅಮ್ಮೋನಿಯರೊಂದಿಗಾಗಲೀ ಮೋವಾಬ್ಯರೊಂದಿಗಾಗಲೀ ನೀವು ಸಂಧಾನ ಮಾಡಿಕೊಳ್ಳಲೇಬಾರದು; ನಿಮ್ಮ ಜೀವಮಾನವೆಲ್ಲಾ ಅವರೊಂದಿಗೆ ಸ್ನೇಹತ್ವದಲ್ಲಿರಬಾರದು.

7‘‘ಎದೋಮ್ಯರನ್ನು ನೀವು ದ್ವೇಷಿಸಬಾರದು. ಅವರು ನಿಮ್ಮ ಸಂಬಂಧಿಕರಾಗಿದ್ದಾರೆ. ಈಜಿಪ್ಟಿನವರನ್ನು ನೀವು ದ್ವೇಷಿಸಬಾರದು. ಅವರ ದೇಶದಲ್ಲಿ ನೀವು ಪರದೇಶಿಗಳಾಗಿದ್ದಿರಲ್ಲಾ? 8ಎದೋಮ್ಯರ ಮತ್ತು ಈಜಿಪ್ಟಿನವರ ಮೂರನೆ ತಲೆಮಾರಿನವರು ಇಸ್ರೇಲರೊಂದಿಗೆ ದೇವಾರಾಧನೆ ಮಾಡಬಹುದು.

## ಪಾಳೆಯವನ್ನು ಶುದ್ಧವಾಗಿಡಬೇಕು

9‘‘ನಿಮ್ಮ ಸೈನ್ಯವು ವೈರಿಗಳೊಂದಿಗೆ ಯುದ್ಧಮಾಡಲು ಹೋದಾಗ ನಿಮ್ಮನ್ನು ಅಶುದ್ಧಪಡಿಸುವ ಪ್ರತಿಯೊಂದರಿಂದಲೂ ನೀವು ದೂರವಾಗಿರಿ. 10ಒಬ್ಬನಿಗೆ ರಾತ್ರಿ ವೀರ್ಯಸ್ಖಲನವಾದರೆ ಅವನು ಪಾಳೆಯದಿಂದ ಹೊರಗೆ ಹೋಗಿ ಪ್ರತ್ಯೇಕವಾಗಿರಬೇಕು. 11ಸಾಯಂಕಾಲವಾದಾಗ ಅವನು ಸ್ನಾನಮಾಡಿ ಸೂರ್ಯಮುಳುಗಿದ ಬಳಿಕ ಪಾಳೆಯದೊಳಕ್ಕೆ ಬರಬಹುದು.

12‘‘ಪಾಳೆಯದ ಹೊರಗೆ ಬಹಿರ್ದೇಶಕ್ಕೆ ಹೋಗಲು ಒಂದು ಸ್ಥಳವನ್ನು ನೇಮಿಸಬೇಕು. 13ನಿಮ್ಮ ಆಯುಧಗಳೊಂದಿಗೆ ನೀವು ಒಂದು ಕೋಲನ್ನು ಇಟ್ಟುಕೊಳ್ಳಬೇಕು. ಈ ಕೋಲಿನಿಂದ ಮಣ್ಣು ಅಗೆದು ನೆಲದಲ್ಲಿ ಚಿಕ್ಕ ಗುಂಡಿ ತೋಡಲೂ ಮತ್ತು ಹೊಟ್ಟೆ ಖಾಲಿ ಮಾಡಿದ ಬಳಿಕ ಆ ಗುಂಡಿಯನ್ನು ಮಣ್ಣಿನಿಂದ ಮುಚ್ಚಲೂ ಸಹಾಯವಾಗುವುದು. 14ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಸಂರಕ್ಷಿಸಲೂ ವೈರಿಗಳನ್ನು ಸೋಲಿಸುವಂತೆ ಸಹಾಯಮಾಡಲೂ ನಿಮ್ಮೊಂದಿಗೆ ಪಾಳೆಯದಲ್ಲಿರುವುದರಿಂದ ನಿಮ್ಮ ಪಾಳೆಯವು ಪವಿತ್ರವಾಗಿರಬೇಕು. ಇಲ್ಲದಿದ್ದಲ್ಲಿ ನಿಮ್ಮ ಪಾಳೆಯದಲ್ಲಿರುವ ಹೊಲಸನ್ನು ನೋಡಿ ಆತನು ಹಿಂದಿರುಗಿ ಹೋಗುವನು.

## ಇತರ ವಿಧಿನಿಯಮಗಳು

15‘‘ಒಬ್ಬ ಗುಲಾಮನು ತನ್ನ ಧಣಿಯ ಬಳಿಯಿಂದ ಓಡಿ ಹೋಗಿ ನಿಮ್ಮ ಬಳಿಗೆ ಬಂದರೆ ನೀವು ಅವನ ಧಣಿಗೆ ಅವನನ್ನು ಒಪ್ಪಿಸಬಾರದು. 16ಅವನು ನಿಮ್ಮ ಬಳಿಯಲ್ಲಿ ಇರಲು ಇಷ್ಟಪಟ್ಟರೆ ಅಥವಾ ಬೇರೆ ಊರಿಗೆ ಹೋಗಲು ಇಷ್ಟಪಟ್ಟರೆ ನೀವು ಅವನಿಗೆ ತೊಂದರೆ ಕೊಡಬಾರದು.

17‘‘ಇಸ್ರೇಲರ ಗಂಡಸಾಗಲೀ ಹೆಂಗಸಾಗಲೀ ದೇವಸ್ಥಾನದ ವೇಶ್ಯೆಯಾಗಬಾರದು. 18ಸೂಳೆತನದಿಂದ ಗಳಿಸಿದ ಹಣವನ್ನು ನಿಮ್ಮ ದೇವರಾದ ಯೆಹೋವನ ವಿಶೇಷ ವಾಸಸ್ಥಾನಕ್ಕೆ ತೆಗೆದುಕೊಂಡು ಬರಬಾರದು. ಒಬ್ಬನು ತಾನು ಹೊತ್ತುಕೊಂಡ ಹರಕೆಯನ್ನು ಆ ಹಣದಿಂದ ಪೂರೈಸಕೂಡದು. ಯಾಕಂದರೆ ಲೈಂಗಿಕ ಪಾಪದಲ್ಲಿ ತಮ್ಮ ದೇಹಗಳನ್ನು ಮಾರುವವರನ್ನು ನಿಮ್ಮ ದೇವರಾದ ಯೆಹೋವನು ದ್ವೇಷಿಸುತ್ತಾನೆ; ಲೈಂಗಿಕ ಪಾಪಗಳ ಆದಾಯದಿಂದ ಬಂದ ಹಣದಿಂದ ಖರೀದಿ ಮಾಡಿದ ಕಾಣಿಕೆಗಳನ್ನು ಆತನು ದ್ವೇಷಿಸುತ್ತಾನೆ.

19‘‘ನೀವು ಇನ್ನೊಬ್ಬ ಇಸ್ರೇಲಿಗೆ ಸಾಲಕೊಟ್ಟರೆ ಅದಕ್ಕೆ ಬಡ್ಡಿ ವಸೂಲು ಮಾಡಬಾರದು. 20ಪರದೇಶಸ್ಥರಿಗೆ ನೀವು ಬಡ್ಡಿಗೆ ಸಾಲಕೊಡಬಹುದು. ಆದರೆ ಸ್ವದೇಶದವನಾದ ಇಸ್ರೇಲಿನವನಿಗೆ ಬಡ್ಡಿಗೆ ಸಾಲ ಕೊಡಬಾರದು. ನೀವು ಹೀಗೆ ಮಾಡಿದ್ದಲ್ಲಿ, ನೀವು ಹೋಗಿ ನೆಲೆಸುವ ದೇಶದಲ್ಲಿ ನೀವು ಮಾಡುವ ಪ್ರತಿಯೊಂದರಲ್ಲೂ ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಆಶೀರ್ವದಿಸುವನು.

21‘‘ನೀವು ನಿಮ್ಮ ದೇವರಾದ ಯೆಹೋವನಿಗೆ ಹರಕೆ ಹೊತ್ತರೆ ಅದನ್ನು ಸಲ್ಲಿಸಲು ನಿಧಾನ ಮಾಡಬೇಡಿ. ನಿಮ್ಮ ದೇವರಾದ ಯೆಹೋವನು ಅದನ್ನು ನಿಮ್ಮಿಂದ ಕೇಳುವವನಾಗಿದ್ದಾನೆ. ಹರಕೆ ಹೊತ್ತು ಸಲ್ಲಿಸದಿದ್ದರೆ ನೀವು ಪಾಪ ಮಾಡುವವರಾಗಿದ್ದೀರಿ. 22ನೀವು ಹರಕೆ ಮಾಡಿಕೊಳ್ಳದಿದ್ದರೆ ಪಾಪ ಮಾಡುವುದಿಲ್ಲ. 23ಆದರೆ ನೀನು ಏನನ್ನು ಮಾಡುತ್ತೀ ಎಂದು ಹರಕೆ ಹಾಕಿಕೊಂಡರೆ ಹಾಗೆಯೇ ಮಾಡಬೇಕು. ನೀವು ಹರಕೆ ಮಾಡುವಂತೆ ದೇವರು ನಿಮ್ಮನ್ನು ಬಲವಂತ ಮಾಡಲಿಲ್ಲವಲ್ಲಾ. ಆದುದರಿಂದ ನೀವು ವಾಗ್ದಾನ ಮಾಡಿದ್ದನ್ನು ಪೂರೈಸಬೇಕು.

24‘‘ಒಬ್ಬನ ತೋಟದೊಳಗಿಂದ ನೀವು ಹಾದು ಹೋಗುತ್ತಿರುವಾಗ ನಿಮಗೆ ಬೇಕಾಗುವಷ್ಟು ಹಣ್ಣನ್ನೂ ಕಿತ್ತು ತಿನ್ನಿ. ಆದರೆ ನೀವು ಮಕ್ಕರಿಯಲ್ಲಿ ತುಂಬಿಸಿಕೊಂಡು ಹೋಗಬಾರದು. 25ಒಬ್ಬನ ಧಾನ್ಯದ ಹೊಲದಲ್ಲಿ ಹಾದುಹೋಗುತ್ತಿರುವಾಗ ನಿನ್ನ ಕೈಯಿಂದ ಹೊಸೆದು ತಿನ್ನುವಷ್ಟು ಧಾನ್ಯವನ್ನು ನೀವು ತಿನ್ನಬಹುದು; ಆದರೆ ನೀವು ಕತ್ತಿಯಿಂದ ಧಾನ್ಯವನ್ನು ಕೊಯಿದು ನಿಮ್ಮೊಂದಿಗೆ ಒಯ್ಯಬೇಡಿ.

24 ‘‘ಒಬ್ಬಾಕೆಯನ್ನು ಒಬ್ಬನು ಮದುವೆಯಾದ ಬಳಿಕ, ಅವಳಲ್ಲಿ ನಾಚಿಕೆಕರವಾದದ್ದೇನಾದರೂ ಇದ್ದರೆ ಅವನು ವಿವಾಹವಿಚ್ಛೇದನಾ ಪತ್ರಗಳಿಗೆ ಸಹಿ ಹಾಕಿ ಅವಳ ಕೈಯಲ್ಲಿ ಕೊಡಬೇಕು. ಆಮೇಲೆ ಆಕೆಯನ್ನು ತನ್ನ ಮನೆಯಿಂದ ಹೊರಗೆ ಕಳುಹಿಸಬೇಕು. 2ಅವನ ಮನೆಯಿಂದ ಅವಳು ಹೊರಗೆ ಕಳುಹಿಸಲ್ಪಟ್ಟ ಮೇಲೆ ಆಕೆ ಬೇರೊಬ್ಬನನ್ನು ಮದುವೆಯಾಗಬಹುದು. 3-4ಆಕೆಯ ಹೊಸ ಗಂಡನೂ ಆಕೆಯನ್ನು ಇಷ್ಟಪಡದೆ ಮನೆಯಿಂದ ಹೊರಗೆ ಕಳುಹಿಸಿದರೆ ಅಥವಾ ಎರಡನೆ ಗಂಡನು ಸತ್ತು ಹೋದರೆ ಆಕೆಯ ಮೊದಲನೆಯ ಗಂಡನು ಆಕೆಯನ್ನು ಮತ್ತೆ ಮದುವೆಯಾಗಬಾರದು. ಅವನಿಗೆ ಆಕೆಯು ಅಶುದ್ಧಳಾದಳು. ಅವನು ಆಕೆಯನ್ನು ಮತ್ತೆ ಮದುವೆಯಾದಲ್ಲಿ ಅವನು ಯೆಹೋವನಿಗೆ ಅಸಹ್ಯವಾದದ್ದನ್ನು ಮಾಡುವವನಾಗಿದ್ದಾನೆ. ನಿಮ್ಮ ದೇವರಾದ

ಯೆಹೋವನು ನಿಮಗೆ ಕೊಡುವ ದೇಶದಲ್ಲಿ ನೀವು ಇಂಥಾ ಪಾಪಗಳನ್ನು ಮಾಡಬಾರದು.

5‘‘ಒಬ್ಬನು ಹೊಸದಾಗಿ ಮದುವೆಯಾಗಿದ್ದಲ್ಲಿ ಅವನನ್ನು ಸೈನ್ಯಕ್ಕೆ ಕಳುಹಿಸಬಾರದು; ವಿಶೇಷವಾದ ಜವಾಬ್ದಾರಿಯನ್ನು ಅವನಿಗೆ ಕೊಡಬಾರದು. ಒಂದು ವರ್ಷ ಅವನು ಮನೆಯಲ್ಲಿದ್ದುಕೊಂಡು ತನ್ನ ಹೆಂಡತಿಯನ್ನು ಸಂತೋಷಪಡಿಸಬೇಕು.

6‘‘ಒಬ್ಬನು ನಿಮ್ಮಿಂದ ಏನಾದರೊಂದು ವಸ್ತುವನ್ನು ಎರವಲಾಗಿ ತೆಗೆದುಕೊಳ್ಳುವುದಾದರೆ ಅವನ ಬೀಸುವ ಕಲ್ಲಿನ ಒಂದು ಭಾಗವನ್ನು ಒತ್ತೆಯಾಗಿಟ್ಟುಕೊಳ್ಳಬಾರದು. ಇಲ್ಲವಾದರೆ ಅವನ ಆಹಾರವನ್ನೇ ಅವನಿಂದ ಕಿತ್ತುಕೊಂಡ ಹಾಗಾಯಿತು.

7‘‘ಒಬ್ಬನು ಇನ್ನೊಬ್ಬ ಇಸ್ರೇಲನನ್ನು ಕದ್ದುಕೊಂಡು ಹೋಗಿ ಅವನನ್ನು ಗುಲಾಮನನ್ನಾಗಿ ಮಾರಬಾರದು. ಹಾಗೆ ಮಾಡಿದವರನ್ನು ಸಾಯಿಸಬೇಕು. ನಿಮ್ಮ ಕುಲದಿಂದ ಅಂಥಾ ಪಾಪವನ್ನು ತೆಗೆದುಹಾಕಬೇಕು.

8‘‘ನಿಮ್ಮಲ್ಲಿ ಯಾರಿಗಾದರೂ ಚರ್ಮರೋಗವಿದ್ದಲ್ಲಿ ಯಾಜಕನು ಹೇಳುವ ರೀತಿಯನ್ನು ಅನುಸರಿಸಬೇಕು. ನಾನು ಯಾಜಕರಿಗೆ ತಿಳಿಸಿದ ಮೇರೆಗೆ ನೀವು ಮಾಡಬೇಕು. 9ಈಜಿಪ್ಟಿನಿಂದ ಹೊರಟುಬಂದಾಗ ದಾರಿಯಲ್ಲಿ ದೇವರಾದ ಯೆಹೋವನು ಮಿರ್ಯಾಮಳಿಗೆ ಏನು ಮಾಡಿದನೆಂದು ಸ್ಮರಿಸಿರಿ.

10‘‘ನೀವು ಯಾರಿಗಾದರೂ ಸಾಲ ಕೊಟ್ಟರೆ ಅದಕ್ಕೆ ಒತ್ತೆಯಾಗಿ ವಸ್ತುವನ್ನು ತೆಗೆದುಕೊಳ್ಳಲು ಅವನ ಮನೆಯೊಳಗೆ ಹೋಗಬೇಡಿ. 11ನೀವು ಹೊರಗೆ ನಿಂತುಕೊಳ್ಳಬೇಕು. ಸಾಲ ತೆಗೆದುಕೊಂಡ ವ್ಯಕ್ತಿಯು ತನ್ನ ಮನೆಯೊಳಗಿಂದ ಏನಾದರೂ ವಸ್ತುವನ್ನು ಒತ್ತೆಯಾಗಿ ನಿಮಗೆ ತಂದು ಕೊಡುವನು. 12ಅವನು ಬಡವನಾದರೆ ಅವನು ತನ್ನ ಕಂಬಳಿಯನ್ನೇ ತಂದುಕೊಡಬಹುದು. ಅದನ್ನು ರಾತ್ರಿ ಇಟ್ಟುಕೊಳ್ಳಬಾರದು. 13ಪ್ರತೀ ಸಾಯಂಕಾಲ ಆ ಕಂಬಳಿಯನ್ನು ಹಿಂದಕ್ಕೆ ಕೊಡಬೇಕು. ಆಗ ಅವನಿಗೆ ರಾತ್ರಿ ಹೊದ್ದುಕೊಳ್ಳಲು ಇರುವುದು. ಅವನು ನಿನ್ನನ್ನು ಆಶೀರ್ವದಿಸುವನು. ಅಲ್ಲದೆ ದೇವರಾದ ಯೆಹೋವನು ನಿಮ್ಮ ಆ ಒಳ್ಳೆಯ ಕಾರ್ಯವನ್ನು ಗಣನೆಗೆ ತರುವನು.

14‘‘ಬಡವನಾಗಿರುವ ದಿನಕೂಲಿಯವನಿಗೆ ಮೋಸ ಮಾಡಬಾರದು. ಅವನು ಇಸ್ರೇಲನಾಗಿರಬಹುದು ಅಥವಾ ಪರದೇಶಸ್ತನಾಗಿರಬಹುದು. 15ಸೂರ್ಯ ಮುಳುಗುವುದರೊಳಗೆ ಅವನಿಗೆ ಸಲ್ಲಬೇಕಾದ ಕೂಲಿಯನ್ನು ಕೊಟ್ಟುಬಿಡು. ಅವನು ಬಡವನಾಗಿದ್ದಾನೆ. ನೀನು ಕೊಡುವ ಕೂಲಿಯಿಂದಲೆ ಅವನು ತನ್ನ ಹಸಿವನ್ನು ನೀಗಿಸಿಕೊಳ್ಳಬೇಕು. ನೀನು ಅವನ ಕೂಲಿ ಕೊಡದಿದ್ದಲ್ಲಿ ಅವನು ದೇವರಾದ ಯೆಹೋವನಿಗೆ ದೂರು ಹೇಳುವನು. ಆಗ ನೀನು ಪಾಪಮಾಡುವವನಾಗಿರುವೆ.

16‘‘ಮಕ್ಕಳು ಮಾಡಿದ ಪಾಪಕ್ಕಾಗಿ ಅವರ ತಂದೆತಾಯಿಗಳಿಗೆ ಮರಣಶಿಕ್ಷೆಯನ್ನು ವಿಧಿಸಕೂಡದು. ತಂದೆತಾಯಿಗಳು ಮಾಡಿದ ಪಾಪಕ್ಕಾಗಿ ಮಕ್ಕಳಿಗೆ ಮರಣ ಶಿಕ್ಷೆಯನ್ನು ವಿಧಿಸಕೂಡದು. ಪಾಪ ಮಾಡಿದವರಿಗೇ ಮರಣಶಿಕ್ಷೆಯಾಗ ಬೇಕು.

17‘‘ಪರದೇಶಸ್ತರನ್ನು ಮತ್ತು ಅನಾಥರನ್ನು ಯೋಗ್ಯವಾದ ರೀತಿಯಲ್ಲಿ ನೋಡಿಕೊಳ್ಳಬೇಕು. ವಿಧವೆಯರ ಬಟ್ಟೆಗಳನ್ನು ಒತ್ತೆಯಿಟ್ಟುಕೊಳ್ಳಕೂಡದು. 18ನೀವು ಈಜಿಪ್ಟಿನಲ್ಲಿ ಬಡವರಾದ ಗುಲಾಮರಾಗಿದ್ದುದನ್ನು ಸ್ಮರಿಸಿಕೊಳ್ಳಿರಿ. ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಬಿಡಿಸಿ ಸ್ವತಂತ್ರರನ್ನಾಗಿ ಮಾಡಿದನು. ಆದುದರಿಂದ ನೀವು ಬಡವರಿಗೆ ದಯೆ ತೋರಿಸಬೇಕು.

19‘‘ನೀವು ಹೊಲದಲ್ಲಿ ಬೆಳೆದ ಬೆಳೆಯನ್ನು ಕೊಯ್ದು ಮನೆಗೆ ತರುವಾಗ ಕೆಲವು ಸಿವುಡುಗಳನ್ನು ನೀವು ಹೊಲದಲ್ಲಿಯೇ ಬಿಟ್ಟು ಬಂದಿದ್ದರೆ ಅದನ್ನು ತರಲು ಹಿಂದಕ್ಕೆ ಹೋಗಬೇಡಿ. ಅದನ್ನು ನಿಮ್ಮ ಊರಿನಲ್ಲಿರುವ ಅನಾಥರಿಗೂ ವಿಧವೆಯವರಿಗೂ ಪರದೇಶಸ್ಥರಿಗೂ ಬಿಡಿರಿ. ನೀವು ಹಾಗೆ ಮಾಡಿದರೆ ದೇವರಾದ ಯೆಹೋವನು ನಿಮಗೆ ಶುಭವನ್ನು ಉಂಟುಮಾಡುವನು. 20ನೀವು ನಿಮ್ಮ ಎಣ್ಣೆಮರಗಳ ಕಾಯಿಗಳನ್ನು ಉದುರಿಸುವಾಗ ಮತ್ತೆ ಹೋಗಿ ಕೊಂಬೆಗಳಲ್ಲಿ ಕಾಯಿ ಹುಡುಕಬಾರದು. ಬಿಟ್ಟ ಕಾಯಿಗಳು ಪರದೇಶಸ್ಥರಿಗೂ ಊರಿನ ಅನಾಥ ಮತ್ತು ವಿಧವೆಯವರಿಗೂ ಆಗುವುದು. 21ನಿಮ್ಮ ತೋಟದಿಂದ ಹಣ್ಣುಗಳನ್ನು ಕೂಡಿಸುವಾಗ ಉಳಿದ ಹಣ್ಣುಗಳನ್ನು ಶೇಖರಿಸಲು ಹಿಂತಿರುಗಬೇಡಿ; ಆ ಉಳಿದ ದ್ರಾಕ್ಷಿ ಹಣ್ಣುಗಳು ಊರಲ್ಲಿರುವ ಅನಾಥರಿಗೂ ವಿಧವೆಯರಿಗೂ ಮತ್ತು ಪರದೇಶಸ್ಥರಿಗೂ ಬಿಡಿರಿ. 22ನೀವು ಈಜಿಪ್ಟ್ ದೇಶದಲ್ಲಿ ದಿಕ್ಕಿಲ್ಲದ ಬಡಗುಲಾಮರಾಗಿದ್ದಿರೆಂದು ನೆನಪಿನಲ್ಲಿಟ್ಟುಕೊಳ್ಳಿರಿ. ಆದುದರಿಂದಲೇ ಬಡವರಿಗೆ ನೀವು ಹೀಗೆ ಮಾಡಬೇಕೆಂದು ನಿಮಗೆ ತಿಳಿಸುತ್ತಿದ್ದೇನೆ.

25 ‘‘ನಿಮ್ಮಲ್ಲಿ ಯಾರಿಗಾದರೂ ಇಬ್ಬರಿಗೆ ವಾಗ್ವಾದವಿದ್ದಲ್ಲಿ ಅವರು ಅದನ್ನು ನ್ಯಾಯಸ್ಥಾನಕ್ಕೆ ತೆಗೆದುಕೊಂಡು ಹೋಗಲಿ. ಅಲ್ಲಿ ನ್ಯಾಯಾಧೀಶರು ಯಾರು ಸರಿ ಯಾರು ತಪ್ಪು ಎಂದು ತೀರ್ಮಾನಿಸುವರು. 2ನ್ಯಾಯಾಧೀಶರು ಒಬ್ಬನಿಗೆ ಕೊರಡೆ ಏಟು ಕೊಡಬೇಕೆಂದು ತೀರ್ಮಾನಿಸಿದರೆ ಅವನು ಆ ಶಿಕ್ಷೆ ಹೊಂದುವವನನ್ನು ಬೋರಲು ಮಲಗಿಸಿ ನ್ಯಾಯಾಧೀಶನ ಕಣ್ಣು ಮುಂದೆ ಅವನಿಗೆ ಕೊರಡೆ ಏಟು ಹೊಡಿಸಬೇಕು. ಅವನ ಅಪರಾಧಕ್ಕನುಸಾರವಾಗಿ ಕೊರಡೆ ಏಟುಗಳ ಸಂಖ್ಯೆಯು ಏರುವದು. 3ಒಬ್ಬನಿಗೆ ನಲವತ್ತು ಕೊರಡೆ ಏಟುಗಳಿಂದ

ಹೆಚ್ಚಾಗಿ ಹೊಡೆಯಬಾರದು. ಅದಕ್ಕಿಂತ ಹೆಚ್ಚು ಹೊಡೆ
ದರೆ ಅವನ ಪ್ರಾಣವು ನಿಮ್ಮ ದೃಷ್ಟಿಗೆ ಅಮೂಲ್ಯವಾಗಿಲ್ಲ
ವೆಂದು ತಿಳಿದುಬರುತ್ತದೆ.
4‘‘ಕಣವನ್ನು ತುಳಿಯಲು ಎತ್ತುಗಳನ್ನು ಉಪ
ಯೋಗಿಸುವಾಗ ಅವುಗಳು ಧಾನ್ಯ ತಿನ್ನುತ್ತವೆ ಎಂದು
ಅವುಗಳ ಬಾಯಿಗಳನ್ನು ಕಟ್ಟಬಾರದು.
5ಇಬ್ಬರು ಅಣ್ಣತಮ್ಮಂದಿರು ಜೀವಿಸುತ್ತಿರುವಾಗ
ಒಬ್ಬನು ಮಕ್ಕಳಿಲ್ಲದೆ ಸತ್ತು ಹೋದರೆ ಅವನ ಹೆಂಡತಿಯು
ಕುಟುಂಬದಿಂದ ಹೊರಗೆ ಮದುವೆಯಾಗಬಾರದು.
ಅವಳ ಮೈದುನ ಆಕೆಯನ್ನು ಮದುವೆಯಾಗಿ, ತನ್ನ
ಮೈದುನ ಧರ್ಮವನ್ನು ನೆರವೇರಿಸಬೇಕು. 6ಅವಳಿಗೆ ಅವ
ನಿಂದ ಹುಟ್ಟುವ ಮೊದಲನೆಯ ಮಗು ಅವಳ ಮೊದಲ
ನೆಯ ಗಂಡನಿಗೆ ಸೇರಿದ್ದೆಂದು ಪರಿಗಣಿಸಲ್ಪಡಬೇಕು.
ಹೀಗೆ ಸತ್ತುಹೋಗಿದ ಅಣ್ಣನ ವಂಶವು ಮುಂದುವರಿಯು
ವುದು. 7ಆದರೆ ಮೈದುನನು ಸತ್ತು ಹೋದ ತನ್ನ ಅಣ್ಣನ
ಸ್ಥಾನವನ್ನು ತೆಗೆದುಕೊಳ್ಳಲು ಇಷ್ಟಪಡದೆ ಹೋದಲ್ಲಿ,
ಆಕೆಯು ಊರಿನ ಹಿರಿಯರ ಬಳಿಗೆ ಹೋಗಿ ಹಿರಿಯರಿಗೆ
ಹೀಗೆ ಹೇಳಬೇಕು: ‘ನನ್ನ ಮೈದುನನು ತನ್ನ ಅಣ್ಣನ ಹೆಸರು
ಇಸ್ರೇಲಿನಲ್ಲಿ ಉಳಿಸಲು ಇಷ್ಟಪಡುವುದಿಲ್ಲ.’ 8ಆಗ
ಊರಿನ ಹಿರಿಯರು ಆ ಮೈದುನನನ್ನು ಕರಿಸಿ ಅವ
ನೊಂದಿಗೆ ಮಾತನಾಡಬೇಕು. ಅವನು ತನ್ನ ನಿರ್ಧಾರ
ವನ್ನು ಬದಲಾಯಿಸದೆ, ‘ನನಗೆ ಅವಳನ್ನು ಹೆಂಡತಿಯಾಗಿ
ತೆಗೆದುಕೊಳ್ಳಲು ಇಷ್ಟವಿಲ್ಲ’ ಎಂದು ಹೇಳಿದರೆ, 9ಅವನ
ಅಣ್ಣನ ಹೆಂಡತಿಯು ಮುಂದೆ ಬಂದು ಹಿರಿಯರ
ಸಮ್ಮುಖದಲ್ಲಿ ಅವನ ಕಾಲಿನಿಂದ ಚಪ್ಪಲಿಗಳನ್ನು ತೆಗೆದು
ಅವನ ಮುಖಕ್ಕೆ ಉಗಿಯಬೇಕು. ‘ತನ್ನ ಮೈದುನ ಧರ್ಮ
ವನ್ನು ನೆರವೇರಿಸದೆ ತನ್ನ ಅಣ್ಣನಿಗೆ ವಂಶವನ್ನು ಕೊಡದವ
ನಿಗೆ ಇದೇ ಗತಿ’ ಎಂದು ಹೇಳಬೇಕು. 10 ಆಗ ಅವನ
ಸಂತಾನವು, ‘ಚಪ್ಪಲಿ ತೆಗೆಯಲ್ಪಟ್ಟ ಸಂತಾನ’ ಎಂದು
ಕರೆಯಲ್ಪಡುವುದು.
11‘‘ಇಬ್ಬರು ಗಂಡಸರು ಜಗಳವಾಡುತ್ತಿರುವಾಗ ಒಬ್ಬನ
ಹೆಂಡತಿಯು ಗಂಡನ ಸಹಾಯಮಾಡಲಿಕ್ಕೆ ಬಂದು ಜಗಳ
ವಾಡುವ ಇನ್ನೊಬ್ಬ ಗಂಡಸಿನ ಗುಪ್ತಾಂಗವನ್ನು ಹಿಡಿಯ
ಬಾರದು. 12ಅಂಥವಳ ಕೈಯನ್ನು ಕಡಿದು ಹಾಕಿರಿ; ದಯೆ
ತೋರಿಸಬೇಡಿ.
13‘‘ಮೋಸದ ತೂಕದ ಕಲ್ಲುಗಳನ್ನು ಉಪಯೋಗಿಸ
ಬೇಡಿ. 14ನಿಮ್ಮ ಮನೆಯೊಳಗೆ ಮೋಸದ ತೂಕದ ಕಲ್ಲುಗ
ಳನ್ನಿಡಬೇಡಿ. 15ನೀವು ಸರಿಯಾದ ತೂಕದ ಕಲ್ಲುಗಳನ್ನು
ಉಪಯೋಗಿಸಬೇಕು. ಆಗ ನಿಮ್ಮ ದೇವರಾದ
ಯೆಹೋವನು ನಿಮಗೆ ಕೊಡಲಿರುವ ದೇಶದಲ್ಲಿ ಬಹು
ಕಾಲ ಬಾಳುವಿರಿ. 16ಮೋಸವುಳ್ಳ ತೂಕದ ಕಲ್ಲುಗಳನ್ನು
ಉಪಯೋಗಿಸುವವರನ್ನು ದೇವರಾದ ಯೆಹೋವನು
ದ್ವೇಷಿಸುತ್ತಾನೆ. ಹೌದು, ಆತನು ಮೋಸ ಮಾಡು
ವವರನ್ನು ದ್ವೇಷಿಸುತ್ತಾನೆ.

## ಅಮಾಲೇಕ್ಯರನ್ನು ನಾಶಮಾಡಬೇಕು

17‘‘ನೀವು ಈಜಿಪ್ಟಿನಿಂದ ಹೊರಬರುವಾಗ
ಅಮಾಲೇಕ್ಯರು ನಿಮಗೆ ಏನು ಮಾಡಿದರೆಂಬುದನ್ನು
ನೆನಪಿನಲ್ಲಿಡಿರಿ. 18ಅಮಾಲೇಕ್ಯರು ದೇವರನ್ನು ಗೌರವಿ
ಸಲಿಲ್ಲ. ನೀವು ಆಯಾಸಗೊಂಡು ಬಲಹೀನರಾಗಿದ್ದಾಗ
ಅವರು ನಿಮ್ಮ ಮೇಲೆ ಬಿದ್ದರು. ನಿಮ್ಮ ಗುಂಪಿನಲ್ಲಿ ಹಿಂದೆ
ಉಳಿದವರನ್ನೆಲ್ಲಾ ಕೊಂದರು. 19ಆದುದರಿಂದಲೇ
ಅಮಾಲೇಕ್ಯರನ್ನು ಈ ಭೂಮುಖದಲ್ಲಿರದಂತೆ ಮಾಡ
ಬೇಕು. ನೀವು ನಿಮ್ಮ ದೇಶವನ್ನು ಪ್ರವೇಶಿಸುವಾಗ ನೀವು
ಹಾಗೆ ಮಾಡಬೇಕು. ನಿಮ್ಮ ಸುತ್ತಮುತ್ತಲಿರುವ ವೈರಿಗ
ಳಿಂದ ದೇವರು ನಿಮಗೆ ಶಾಂತಿಯನ್ನು ಅನುಗ್ರಹಿಸುವನು.
ಆದರೆ ಅಮಾಲೇಕ್ಯರನ್ನು ನಾಶ ಮಾಡುವ ಕಾರ್ಯವನ್ನು
ಮರೆಯಬೇಡಿರಿ.

## ಪ್ರಥಮ ಫಲ

26 ‘‘ನಿಮ್ಮ ದೇವರಾದ ಯೆಹೋವನು ನಿಮಗೆ
ಕೊಡುವ ದೇಶವನ್ನು ನೀವು ಬೇಗನೆ ಪ್ರವೇಶಿ
ಸಲಿದ್ದೀರಿ. ಆ ದೇಶವನ್ನು ಸ್ವಾಧೀನಮಾಡಿಕೊಂಡು ಅಲ್ಲಿ
ನೆಲೆಸುವಿರಿ. 2ಯೆಹೋವನು ಕೊಡುವ ಆ ದೇಶದಲ್ಲಿ
ನೀವು ಪ್ರಥಮ ಬೆಳೆಯನ್ನು ಕೂಡಿಸುವಿರಿ. ಪುಟ್ಟಿಗಳಲ್ಲಿ
ಧಾನ್ಯವನ್ನು ಕೂಡಿಸುವಾಗ ಪ್ರಥಮ ಭಾಗವನ್ನು ಪ್ರತ್ಯೇಕ
ವಾಗಿಟ್ಟು ದೇವರಾದ ಯೆಹೋವನು ತನ್ನ ಆಲಯಕ್ಕಾಗಿ
ಆರಿಸುವ ಸ್ಥಳಕ್ಕೆ ಅದನ್ನು ತೆಗೆದುಕೊಂಡು ಹೋಗಿ. 3ಅಲ್ಲಿ
ಸೇವೆ ಮಾಡುತ್ತಿರುವ ಯಾಜಕನಿಗೆ, ‘ಯೆಹೋವನು ನನ್ನ
ಪೂರ್ವಿಕರಿಗೆ ಒಂದು ದೇಶವನ್ನು ಕೊಡುವುದಾಗಿ
ವಾಗ್ದಾನ ಮಾಡಿದನು. ನಾನು ಆ ದೇಶಕ್ಕೆ ಬಂದಿರುತ್ತೇನೆ’
ಎಂದು ಹೇಳಬೇಕು.
4‘‘ಯಾಜಕನು ನಿಮ್ಮ ಕೈಯಲ್ಲಿರುವ ಪುಟ್ಟಿಯನ್ನು
ತೆಗೆದುಕೊಂಡು ಯೆಹೋವನ ಯಜ್ಞವೇದಿಕೆಯ
ಎದುರು ಇಡುವನು. 5ಆಗ ನಿಮ್ಮ ದೇವರಾದ
ಯೆಹೋವನ ಸನ್ನಿಧಾನದಲ್ಲಿ ನೀವು ಹೀಗೆ ಅರಿಕೆ ಮಾಡ
ಬೇಕು: ‘ನಮ್ಮ ಪೂರ್ವಿಕರು ಊರೂರು ತಿರುಗುತ್ತಿದ್ದ
ಅರಾಮ್ಯರಾಗಿದ್ದರು. ಅವರು ಈಜಿಪ್ಟನ್ನು ಸೇರಿ ಅಲ್ಲಿಯೇ
ನೆಲೆಸಿದರು. ಅಲ್ಲಿಗೆ ಅವರು ಹೋದಾಗ ಅವರು ಕೆಲವರೇ
ಆಗಿದ್ದರು. ಆದರೆ ಕಾಲಕ್ರಮೇಣ ಅವರು ದೊಡ್ಡ
ಜನಾಂಗವಾಗಿ ಅಭಿವೃದ್ಧಿ ಹೊಂದಿದರು. 6ಈಜಿಪ್ಟಿನವರು
ನಮ್ಮನ್ನು ಕಠಿಣವಾಗಿ ನೋಡಿಕೊಳ್ಳುತ್ತಿದ್ದರು. ನಮ್ಮನ್ನು
ಗುಲಾಮರಾಗಿ ಉಪಯೋಗಿಸಿದರು. ನಮ್ಮನ್ನು ಹಿಂಸಿಸಿ,
ಕಷ್ಟಕರವಾದ ಕೆಲಸವನ್ನು ಕೊಟ್ಟರು. 7ಆಗ ನಾವು ನಮ್ಮ

ಪೂರ್ವಿಕರ ದೇವರಾದ ಯೆಹೋವನಿಗೆ ಮೊರೆಯಿಟ್ಟೆವು.
ಆತನು ನಮ್ಮ ಕೂಗನ್ನು ಆಲಿಸಿದನು; ನಮ್ಮ ಸಂಕಟ,
ವೇದನೆಗಳನ್ನು ನೋಡಿದನು. 8ಆಮೇಲೆ ತನ್ನ ಭುಜ
ಪರಾಕ್ರಮದಿಂದ ಯೆಹೋವನು ನಮ್ಮನ್ನು ಈಜಿಪ್ಟಿನಿಂದ
ಹೊರತಂದನು. ಆತನು ಅದ್ಭುತಕಾರ್ಯಗಳನ್ನು,
ಆಶ್ಚರ್ಯಕರವಾದ ಕಾರ್ಯಗಳನ್ನು ಮಾಡಿದನು.
9ಅಲ್ಲಿಂದ ನಮ್ಮನ್ನು ಕರೆದುತಂದು ನಮಗೆ ಈ ಒಳ್ಳೆಯ
ದೇಶವನ್ನು ಕೊಟ್ಟನು. 10ಈಗ ಯೆಹೋವನೇ, ನೀನು
ಕೊಟ್ಟ ದೇಶದಲ್ಲಿ ಬೆಳೆದ ಬೆಳೆಯಲ್ಲಿ ಪ್ರಥಮ ಫಲಗಳನ್ನು
ತಂದಿದ್ದೇನೆ.'

''ಆ ಪ್ರಥಮ ಬೆಳೆಯನ್ನು ನಿಮ್ಮ ದೇವರಾದ
ಯೆಹೋವನ ಮುಂದೆ ಸುರಿದು ಆರಾಧಿಸಬೇಕು.
11ನೀವೂ ನಿಮ್ಮ ಹೆಂಡತಿ ಮಕ್ಕಳೂ ಸೇರಿ ಅಲ್ಲಿ ಊಟ
ಮಾಡಿ ಸಂತೋಷಿಸಬೇಕು. ನಿಮ್ಮ ಊರಿನಲ್ಲಿರುವ
ಲೇವಿಯರೊಂದಿಗೆ ಮತ್ತು ಪರದೇಶಸ್ಥರೊಂದಿಗೆ ನಿಮ್ಮ
ಪ್ರಥಮ ಫಲಗಳನ್ನು ಹಂಚಿಕೊಳ್ಳಿರಿ.

12''ಪ್ರತೀ ಮೂರನೆಯ ವರುಷವು ದಶಮಾಂಶದ
ವರ್ಷವಾಗಿರುವುದು. ಆಗ ನಿಮ್ಮ ಬೆಳೆಯ ಹತ್ತನೆಯ
ಒಂದು ಅಂಶವನ್ನು ಲೇವಿಯರಿಗೂ ಪರದೇಶಸ್ಥರಿಗೂ
ಅನಾಥರಿಗೂ ವಿಧವೆಯರಿಗೂ ಕೊಡಬೇಕು. ಆಗ
ಅವರಿಗೆ ಊಟ ಮಾಡಲು ಸಾಕಷ್ಟು ಇರುವುದು. 13ನಿನ್ನ
ದೇವರಾದ ಯೆಹೋವನಿಗೆ ನೀನು ಹೀಗೆ ಹೇಳಬೇಕು:
'ನನ್ನ ಮನೆಯೊಳಗಿಂದ ನನ್ನ ಬೆಳೆಯ ಪರಿಶುದ್ಧ ಭಾಗ
ವನ್ನು ತೆಗೆದು ಲೇವಿಯರಿಗೆ, ಪರದೇಶಸ್ಥರಿಗೆ, ಅನಾಥ
ರಿಗೆ. ವಿಧವೆಯರಿಗೆ ಕೊಟ್ಟಿರುತ್ತೇನೆ. ನಿನ್ನ ಕಟ್ಟಳೆಗಳ
ನ್ನೆಲ್ಲಾ ಅನುಸರಿಸಿದ್ದೇನೆ. ನಿನ್ನ ಆಜ್ಞೆಗಳಿಗೆ ವಿಧೇಯ
ನಾಗಲು ನಿರಾಕರಿಸಲಿಲ್ಲ. ನಾನು ಅವುಗಳನ್ನು ಮರೆಯ
ಲಿಲ್ಲ. 14ನಾನು ದುಃಖದಲ್ಲಿರುವಾಗ ಆ ಆಹಾರವನ್ನು
ಊಟಮಾಡಲಿಲ್ಲ. ಈ ಬೆಳೆಯನ್ನು ಶೇಖರಿಸುವಾಗ
ನಾನು ಅಶುದ್ಧನಾಗಿರಲಿಲ್ಲ. ಸತ್ತವರಿಗಾಗಿ ಈ ಆಹಾರ
ವನ್ನು ಅರ್ಪಿಸಲಿಲ್ಲ. ನನ್ನ ದೇವರಾದ ಯೆಹೋವನೇ,
ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗಿದ್ದೇನೆ. ನೀನು
ಆಜ್ಞಾಪಿಸಿದ ಎಲ್ಲಾ ಕಾರ್ಯಗಳನ್ನು ನಾನು ಮಾಡಿದ್ದೇನೆ.
15ನಿನ್ನ ಪರಿಶುದ್ಧ ನಿವಾಸದಿಂದ ನನ್ನನ್ನು ನೋಡು. ನಿನ್ನ
ಜನಾಂಗವಾದ ಇಸ್ರೇಲನ್ನು ಆಶೀರ್ವದಿಸು. ನೀನು
ನಮಗೆ ಕೊಟ್ಟಿರುವ ದೇಶವನ್ನು ಆಶೀರ್ವದಿಸು. ಸಮೃದ್ಧಿ
ಯಿಂದ ಕೂಡಿದ ಈ ದೇಶವನ್ನು ನಮಗೆ ಕೊಡುವೆ ಎಂದು
ನಮ್ಮ ಪೂರ್ವಿಕರಿಗೆ ನೀನು ವಾಗ್ದಾನ ಮಾಡಿರುವೆ.'

### ಯೆಹೋವನ ಆಜ್ಞೆಗಳಿಗೆ ವಿಧೇಯರಾಗಿರಿ

16''ಈ ಎಲ್ಲಾ ಕಟ್ಟಳೆಗಳನ್ನು ಮತ್ತು ನಿಯಮಗಳನ್ನು
ಅನುಸರಿಸಲು ನಿಮ್ಮ ದೇವರಾದ ಯೆಹೋವನು ಇಂದು
ನಿಮಗೆ ಆಜ್ಞಾಪಿಸುತ್ತಾನೆ. ನಿಮ್ಮ ಪೂರ್ಣ ಹೃದಯ
ದಿಂದಲೂ ಆತ್ಮದಿಂದಲೂ ಅವುಗಳನ್ನು ಎಚ್ಚರಿಕೆಯಿಂದ
ಅನುಸರಿಸಿರಿ. 17ಯೆಹೋವನು ನಿಮ್ಮ ದೇವರೆಂದು
ನೀವು ಈ ದಿನ ಪ್ರತಿಜ್ಞೆಮಾಡಿದ್ದೀರಿ. ಆತನು ಹೇಳಿದ
ಎಲ್ಲಾ ಕಟ್ಟಳೆ, ವಿಧಿ, ನಿಯಮಗಳನ್ನು ಅನುಸರಿಸುವಿ
ರೆಂದು ಪ್ರತಿಜ್ಞೆ ಮಾಡಿರುತ್ತೀರಿ. ಆತನು ಹೇಳಿದ್ದನ್ನೆಲ್ಲಾ
ಮಾಡುವುದಾಗಿ ಹೇಳಿರುವಿರಿ. 18ಈ ಹೊತ್ತು
ಯೆಹೋವನು ನಿಮ್ಮನ್ನು ತನ್ನ ಸ್ವಂತ ಜನಾಂಗವೆಂದು
ಸ್ವೀಕರಿಸಿದ್ದಾನೆ ಎಂದು ವಾಗ್ದಾನ ಮಾಡುತ್ತಾನೆ. ನೀವು
ಆತನ ಎಲ್ಲಾ ಆಜ್ಞೆಗಳಿಗೆ ವಿಧೇಯರಾಗಬೇಕು. 19ಎಲ್ಲಾ
ಜನಾಂಗಗಳಿಗಿಂತ ನಿಮ್ಮನ್ನು ಬಲಿಷ್ಠರಾದ ಜನಾಂಗವ
ನ್ನಾಗಿ ಮಾಡುವನು. ದೇವರು ನಿಮಗೆ ಜನರಿಂದ
ಹೊಗಳಿಕೆಯನ್ನು, ಪ್ರಖ್ಯಾತಿಯನ್ನು ಮತ್ತು ಗೌರವವನ್ನು
ಬರಮಾಡುವನು; ಆತನು ವಾಗ್ದಾನ ಮಾಡಿದಂತೆಯೇ
ನೀವು ಪವಿತ್ರ ಜನರಾಗುವಿರಿ.''

### ಜನರಿಗಾಗಿ ಕಲ್ಲಿನಿಂದ ಮಾಡಿದ ಸ್ಮಾರಕ ಕಲ್ಲುಗಳು

27 ಮೋಶೆ ಮತ್ತು ಸಮೂಹದ ಹಿರಿಯರು ಜನ
ರೊಂದಿಗೆ ಮಾತನಾಡಿದರು. ಮೋಶೆಯು
ಹೇಳಿದ್ದೇನೆಂದರೆ, ''ನಾನು ಆಜ್ಞಾಪಿಸಿದ ಎಲ್ಲಾ ವಿಧಿ
ಗಳನ್ನು ಅನುಸರಿಸಿರಿ. 2ನೀವು ಬೇಗನೇ ಜೋರ್ಡನ್
ನದಿಯನ್ನು ದಾಟಿ ನಿಮ್ಮ ದೇವರಾದ ಯೆಹೋವನು
ಕೊಡುವ ದೇಶವನ್ನು ಪ್ರವೇಶಿಸುವಿರಿ. ಆ ದಿವಸ ದೊಡ್ಡ
ದೊಡ್ಡ ಕಲ್ಲುಗಳನ್ನು ರಾಶಿ ಹಾಕಿ ಅದನ್ನು ಗಾರೆ ಮಾಡಿರಿ.
3ಅದರ ಮೇಲೆ ನಾನು ಆಜ್ಞಾಪಿಸಿದನ್ನೆಲ್ಲಾ ಬರೆಯಿರಿ.
ನೀವು ಹೊಳೆ ದಾಟಿದಾಗ ಈ ಕಾರ್ಯವನ್ನು ಮಾಡ
ಬೇಕು. ಆನಂತರ, ಆತನು ನಿಮ್ಮ ಪೂರ್ವಿಕರಿಗೆ ವಾಗ್ದಾನ
ಮಾಡಿದ ಸಮೃದ್ಧಿಯಾದ ದೇಶದೊಳಕ್ಕೆ ಹೋಗಿರಿ.

4''ನೀವು ಆ ದೇಶದೊಳಗೆ ಪ್ರವೇಶಮಾಡಿದ ನಂತರ
ನಾನು ಹೇಳಿದ್ದೆಲ್ಲವನ್ನು ನೀವು ಪರಿಪಾಲಿಸಬೇಕು.
ಏಬಾಲ್ ಬೆಟ್ಟದ ಮೇಲೆ ಸ್ಮಾರಕ ಸ್ಥಂಭವನ್ನು ನಿಲ್ಲಿಸ
ಬೇಕು. ಅದಕ್ಕೆ ಗಾರೆ ಮಾಡಿ. 5ಆಮೇಲೆ ಅಲ್ಲಿಯೇ ಕಲ್ಲಿ
ನಿಂದ ಒಂದು ಯಜ್ಞವೇದಿಕೆಯನ್ನು ಕಟ್ಟಿರಿ. ಆ ಕಲ್ಲು
ಗಳನ್ನು ಕೆತ್ತಲು ಕಬ್ಬಿಣದ ಸಾಧನಗಳನ್ನು ಉಪಯೋಗಿಸ
ಬಾರದು. 6ಕಡಿದ ಕಲ್ಲುಗಳಿಂದ ಯಜ್ಞವೇದಿಕೆಯನ್ನು
ಕಟ್ಟಬಾರದು. ಆ ಯಜ್ಞವೇದಿಕೆಯ ಮೇಲೆ ನಿಮ್ಮ ದೇವ
ರಾದ ಯೆಹೋವನಿಗೆ ಸರ್ವಾಂಗಹೋಮವನ್ನು
ಅರ್ಪಿಸಿರಿ. 7ನೀವು ಅಲ್ಲಿ ಯಜ್ಞವನ್ನರ್ಪಿಸಿ ಸಮಾಧಾನ
ಯಜ್ಞದ ಭೋಜನವನ್ನು ಮಾಡಬೇಕು. ಅಲ್ಲಿ ದೇವರ
ಸನ್ನಿಧಾನದಲ್ಲಿ ಉಂಡು ತಿಂದು ಸಂತೋಷಪಡಿರಿ. 8ಆ
ಕಲ್ಲುಗಳ ಮೇಲೆ ಈ ಉಪದೇಶಗಳನ್ನೆಲ್ಲ ಸ್ಪಷ್ಟವಾಗಿ
ಓದಲು ಸುಲಭವಾದ ರೀತಿಯಲ್ಲಿ ಬರೆಯಬೇಕು.

### ನೀತಿಕ್ರಮಗಳಲ್ಲಿರುವ ಶಾಪಕ್ಕೆ ಜನರ ಸಮ್ಮತ

9‘‘ಮೋಶೆಯೂ ಯಾಜಕರೂ ಇಸ್ರೇಲ್ ಸಮೂಹ
ದವರೊಂದಿಗೆ ಮಾತನಾಡಿದರು. ಆಗ ಮೋಶೆಯು,
‘‘ಇಸ್ರೇಲರೇ, ಮೌನವಾಗಿ ನನ್ನ ಮಾತುಗಳನ್ನು ಕೇಳಿರಿ.
ಈ ದಿನ ನೀವು ದೇವರಾದ ಯೆಹೋವನ ಸ್ವಕೀಯ ಪ್ರಜೆ
ಯಾಗಿರುತ್ತೀರಿ. 10ಆದುದರಿಂದ ಆತನು ಹೇಳಿದ್ದೆಲ್ಲ
ವನ್ನೂ ಮಾಡಿರಿ. ನಾನು ಈ ಹೊತ್ತು ನಿಮಗೆ ಹೇಳುವಂಥ
ಆತನ ಅಪ್ಪಣೆಗಳಿಗೂ ವಿಧಿನಿಯಮಗಳಿಗೂ ವಿಧೇಯ
ರಾಗಿರಿ.’’ ಎಂದು ಹೇಳಿದನು. 11ಅದೇ ದಿವಸ
ಮೋಶೆಯು ಜನರಿಗೆ ಹೇಳಿದ್ದೇನೆಂದರೆ,
12‘‘ಜೋರ್ಡನ್ ನದಿ ದಾಟಿದನಂತರ, ಸಿಮೆಯೋನ್,
ಲೇವಿ ಯೆಹೂದ, ಇಸ್ಸಾಕಾರ್, ಯೋಸೇಫ್, ಮತ್ತು
ಬೆನ್ಯಾಮೀನನ ಕುಲದವರು ಗೆರಿಜ್ಜೀಮ್ ಬೆಟ್ಟದ ಮೇಲೆ
ನಿಂತು ದೇವರ ಆಶೀರ್ವಾದವನ್ನು ಓದಬೇಕು. 13ಅದೇ
ಪ್ರಕಾರ ರೂಬೇನ್, ಗಾದ್, ಆಶೇರ್, ಜೆಬುಲೂನ್,
ದಾನ್ ಮತ್ತು ನಫ್ತಾಲಿ ಕುಲದವರು ಏಬಾಲ್ ಬೆಟ್ಟದ
ಮೇಲೆ ನಿಂತು ದೇವರ ಶಾಪವಚನವನ್ನು ಓದಬೇಕು.

14‘‘ಲೇವಿಯರು ಗಟ್ಟಿಯಾದ ಸ್ವರದಲ್ಲಿ ಇಸ್ರೇಲ
ರೆಲ್ಲರಿಗೆ ಹೀಗೆ ಹೇಳಬೇಕು: 15‘ಸುಳ್ಳುದೇವರನ್ನು ಮಾಡಿ
ಗುಪ್ತಸ್ಥಳದಲ್ಲಿಡುವವನು ಶಾಪಗ್ರಸ್ತನಾಗಲಿ; ಆ ದೇವರು
ಗಳು ಮನುಷ್ಯನ ಕೈಕೆಲಸವೇ; ಕಲ್ಲು, ಮರ, ಹಿತ್ತಾಳೆ
ಗಳಿಂದ ಮಾಡಿದವುಗಳೇ. ಯೆಹೋವನು ಅವುಗಳನ್ನು
ದ್ವೇಷಿಸುತ್ತಾನೆ.’

‘‘ಆಗ ಎಲ್ಲಾ ಜನರು, ‘ಆಮೆನ್’ ಎಂದು ಹೇಳಬೇಕು.

16‘‘ಲೇವಿಯರು, ‘ತಂದೆತಾಯಿಗಳನ್ನು ಸನ್ಮಾನಿಸ
ದವನು ಶಾಪಗ್ರಸ್ತನಾಗಲಿ’ ಎಂದು ಹೇಳಬೇಕು.

‘‘ಆಗ ಸಮೂಹದವರೆಲ್ಲರೂ, ‘ಆಮೆನ್’ ಎಂದು
ಹೇಳಬೇಕು.

17‘‘ಲೇವಿಯರು, ‘ನೆರೆಯವನ ಗಡಿಕಲ್ಲಿನ ಸ್ಥಳ
ಬದಲಾಯಿಸುವವನು ಶಾಪಗ್ರಸ್ತನಾಗಲಿ’ ಎಂದು ಹೇಳಿ
ದಾಗ ಎಲ್ಲರೂ ‘ಆಮೆನ್’ ಎಂದು ಹೇಳಬೇಕು.

18‘‘ಲೇವಿಯರು, ‘ಕುರುಡರಿಗೆ ತಪ್ಪುದಾರಿ ತೋರಿಸು
ವವನು ಶಾಪಗ್ರಸ್ತನಾಗಲಿ’ ಎಂದು ಹೇಳಿಬೇಕು.

‘‘ಆಗ ಸಮೂಹದವರೆಲ್ಲರೂ, ‘ ಆಮೆನ್ ’ ಎಂದು
ಹೇಳಬೇಕು.

19‘‘ಲೇವಿಯರು, ‘ಪರದೇಶಸ್ಥರಿಗೆ, ಅನಾಥರಿಗೆ
ಮತ್ತು ವಿಧವೆಯರಿಗೆ ನ್ಯಾಯವಾದ ತೀರ್ಪನ್ನು ಕೊಡ
ದವನು ಶಾಪಗ್ರಸ್ತನಾಗಲಿ’ ಎಂದು ಹೇಳಬೇಕು.

‘‘ಆಗ ಎಲ್ಲರೂ, ‘ಆಮೆನ್’ ಎಂದು ಹೇಳಬೇಕು.

20‘‘ಲೇವಿಯರು, ‘ತಂದೆಯ ಹೆಂಡತಿಯೊಂದಿಗೆ
ಲೈಂಗಿಕ ಸಂಬಂಧವಿಟ್ಟುಕೊಂಡವನು ಶಾಪಗ್ರಸ್ತನಾಗಲಿ.
ಅವನು ತನ್ನ ತಂದೆಗೆ ಅವಮಾನ ಮಾಡಿದನು.’

‘‘ಆಗ ಸಮೂಹದವರೆಲ್ಲರೂ, ‘ಆಮೆನ್’ ಎಂದು
ಹೇಳಬೇಕು.

21‘‘ಲೇವಿಯರು, ‘ಯಾವನಾದರೂ ಪ್ರಾಣಿಯೊಂದಿಗೆ
ಸಂಭೋಗಿಸಿದರೆ ಅವನು ಶಾಪಗ್ರಸ್ತನಾಗಲಿ’ ಎಂದು
ಹೇಳಬೇಕು.

‘‘ಆಗ ಎಲ್ಲರೂ, ‘ಆಮೆನ್’ ಎಂದು ಹೇಳಬೇಕು.

22ಲೇವಿಯರು, ‘ತನ್ನ ತಂಗಿಯನ್ನಾಗಲೀ ಅಥವಾ ಮಲ
ತಾಯಿಯನ್ನಾಗಲೀ ಕೂಡುವವನು ಶಾಪಗ್ರಸ್ತನಾಗಲಿ’
ಎಂದು ಹೇಳಬೇಕು.

‘‘ಆಗ ಸಮೂಹದವರೆಲ್ಲರೂ, ‘ಆಮೆನ್’ ಎಂದು
ಹೇಳಬೇಕು.

23‘‘ಲೇವಿಯರು, ‘ತನ್ನ ಅತ್ತೆಯೊಡನೆ ಲೈಂಗಿಕ
ಸಂಬಂಧವನ್ನಿಟ್ಟುಕೊಂಡವನು ಶಾಪಗ್ರಸ್ತನಾಗಲಿ’
ಎಂದು ಹೇಳಬೇಕು.

‘‘ಆಗ ಸಮೂಹದವರೆಲ್ಲರೂ, ‘ಆಮೆನ್’ ಎಂದು
ಹೇಳಬೇಕು.

24‘‘ಲೇವಿಯರು, ‘ಇನ್ನೊಬ್ಬ ವ್ಯಕ್ತಿಯನ್ನು ಕೊಲೆ
ಮಾಡಿದವನು ಹಿಡಿಯಲ್ಪಡದಿದ್ದರೂ ಸಹ ಶಾಪಗ್ರಸ್ತ
ನಾಗಲಿ’ ಎಂದು ಹೇಳಬೇಕು.

‘‘ಆಗ ಸಮೂಹದವರು, ‘ಆಮೆನ್’ ಎಂದು ಹೇಳ
ಬೇಕು.

25‘‘ಲೇವಿಯರು, ‘ನಿರಪರಾಧಿಯನ್ನು ಕೊಲ್ಲಲು ಹಣ
ತೆಗೆದುಕೊಳ್ಳುವವನು ಶಾಪಗ್ರಸ್ತನಾಗಲಿ’ ಎಂದು ಹೇಳ
ಬೇಕು.

‘‘ಆಗ ಎಲ್ಲರೂ, ‘ ಆಮೆನ್ ’ ಎಂದು ಹೇಳಬೇಕು.

26‘‘ಧರ್ಮಶಾಸ್ತ್ರವನ್ನು ಪ್ರೋತ್ಸಾಹಿಸುವದಕ್ಕೂ ಅವು
ಗಳನ್ನು ಅನುಸರಿಸಲಿಕ್ಕೂ ನಿರಾಕರಿಸುವವನು ಶಾಪಗ್ರಸ್ತ
ನಾಗಲಿ’’ ಎಂದು ಲೇವಿಯರು ಹೇಳುವಾಗ ಸಮೂಹದ
ವರೆಲ್ಲರೂ, ‘ ಆಮೆನ್ ’ ಎಂದು ಹೇಳಬೇಕು.’’

### ಕಟ್ಟಳೆಗಳನ್ನು ಅನುಸರಿಸಿದವರ ಆಶೀರ್ವಾದ

28 ‘‘ನಾನು ಹೇಳಿದಂಥ ಎಲ್ಲಾ ಧರ್ಮಶಾಸ್ತ್ರವನ್ನು
ಅನುಸರಿಸಿ ಅದಕ್ಕೆ ವಿಧೇಯರಾದರೆ ನಿಮ್ಮ
ದೇವರಾದ ಯೆಹೋವನು ಪ್ರಪಂಚದ ಎಲ್ಲಾ ದೇಶಗಳಿ
ಗಿಂತ ನಿಮ್ಮ ದೇಶವು ಅತಿ ಉನ್ನತಸ್ಥಾನದಲ್ಲಿರುವ ದೇಶ
ವನ್ನಾಗಿ ಮಾಡುವನು. 2ನೀವು ದೇವರಿಗೆ ವಿಧೇಯ
ರಾದರೆ ಈ ಎಲ್ಲಾ ಆಶೀರ್ವಾದಗಳು ನಿಮ್ಮದಾಗುವವು.

3 ‘‘ಯೆಹೋವನು ನಿಮ್ಮನ್ನು ಹೊಲಗಳಲ್ಲಿಯೂ
ಪಟ್ಟಣಗಳಲ್ಲಿಯೂ ಆಶೀರ್ವದಿಸುವನು.
4 ಯೆಹೋವನು ನಿಮ್ಮನ್ನು ಆಶೀರ್ವದಿಸಿ ನಿಮಗೆ
ಅನೇಕ ಮಕ್ಕಳನ್ನು ಅನುಗ್ರಹಿಸುವನು. ನಿಮ್ಮ

ಹೊಲಗಳನ್ನು ಆಶೀರ್ವದಿಸಿ ಒಳ್ಳೆಯ ಬೆಳೆಯನ್ನು
ಅನುಗ್ರಹಿಸುವನು. ನಿಮ್ಮ ಪಶು ಪ್ರಾಣಿಗಳನ್ನು
ಆಶೀರ್ವದಿಸಿ ಹೆಚ್ಚು ಮರಿಗಳನ್ನು ಈಯುವಂತೆ
ಮಾಡುವನು ಆತನು ನಿಮ್ಮ ಎಲ್ಲಾ ಕರು ಕುರಿ
ಮರಿಗಳನ್ನು ಆಶೀರ್ವದಿಸುವನು.
5 ಯೆಹೋವನು ನಿಮ್ಮ ಪುಟ್ಟಿಗಳನ್ನೂ ಪಾತ್ರೆ
ಗಳನ್ನೂ ಆಶೀರ್ವದಿಸಿ ಅವು ಯಾವಾಗಲೂ
ಆಹಾರ ಪದಾರ್ಥಗಳಿಂದ ತುಂಬಿರುವಂತೆ
ಮಾಡುವನು.
6 ನೀವು ಮಾಡುವ ಎಲ್ಲಾ ಕಾರ್ಯಗಳಲ್ಲಿ ಸಫಲ
ಹೊಂದುವಂತೆ ಆಶೀರ್ವದಿಸುವನು.

7“ವೈರಿಗಳು ನಿಮ್ಮೆದುರಾಗಿ ಯುದ್ಧಮಾಡಲು
ಬಂದಾಗ ನಿಮಗೆ ಆತನು ಸಹಾಯ ಮಾಡುವನು.
ವೈರಿಗಳು ಒಂದು ದಿಕ್ಕಿನಿಂದ ಬಂದರೆ ಏಳು ದಾರಿಯಲ್ಲಿ
ಪಲಾಯನ ಮಾಡುವರು.
8“ಯೆಹೋವನು ನಿಮ್ಮನ್ನು ಆಶೀರ್ವದಿಸಿ ನಿಮ್ಮ
ಕಣಜಗಳನ್ನು ಆಶೀರ್ವದಿಸುವನು. ನೀವು ಮಾಡುವ
ಕಾರ್ಯಗಳನ್ನೆಲ್ಲಾ ಆಶೀರ್ವದಿಸುವನು. ನಿಮಗೆ
ಕೊಡುವ ದೇಶದಲ್ಲಿ ನೀವು ವಾಸಿಸುವಾಗ ನಿಮ್ಮನ್ನು
ಆಶೀರ್ವದಿಸುವನು. 9ನೀವು ಯೆಹೋವನ ಆಜ್ಞೆಗಳಿಗೆ
ವಿಧೇಯರಾದರೆ ನಿಮ್ಮ ದೇವರಾದ ಯೆಹೋವನು
ನಿಮ್ಮನ್ನು ತನ್ನ ವಾಗ್ದಾನಕ್ಕನುಸಾರವಾಗಿ ವಿಶೇಷವಾದ
ಸ್ವಕೀಯ ಪ್ರಜೆಯನ್ನಾಗಿ ಮಾಡುವನು. 10ಆಗ ನಿಮ್ಮ
ದೇಶದಲ್ಲಿ ವಾಸಿಸುವವರೆಲ್ಲರೂ ನೀವು ದೇವರ ಹೆಸರಿ
ನಿಂದ ಕರೆಯಲ್ಪಟ್ಟವರೆಂಬುದನ್ನು ನೋಡುವಾಗ ನಿಮಗೆ
ಭಯಪಡುವರು.
11“ನಿಮ್ಮ ದೇವರಾದ ಯೆಹೋವನು ನಿಮಗೆ ಒಳ್ಳೆಯ
ವಸ್ತುಗಳನ್ನು ಕೊಡುವನು; ನಿಮಗೆ ಹೆಚ್ಚು ಮಕ್ಕಳನ್ನು
ಅನುಗ್ರಹಿಸುವನು. ನಿಮ್ಮ ಪಶುಗಳು ಹೆಚ್ಚು ಮರಿಗಳನ್ನು
ಈಯುವಂತೆ ಮಾಡುವನು. ಯೆಹೋವನು ನಿಮಗೆ
ಕೊಡುವುದಾಗಿ ವಾಗ್ದಾನ ಮಾಡಿದ ದೇಶದಲ್ಲಿ ನಿಮ್ಮ
ಹೊಲವು ಒಳ್ಳೆಯ ಬೆಳೆಗಳನ್ನು, ಫಲಿಸುತ್ತದೆ.
12ಯೆಹೋವನು ತನ್ನ ಆಶೀರ್ವಾದಗಳೆಂಬ ಭಂಡಾರ
ವನ್ನೇ ನಿಮಗೆ ತೆರೆಯುವನು. ಕಾಲಕ್ಕೆ ತಕ್ಕಹಾಗೆ ಮಳೆ
ಸುರಿಯುವಂತೆ ಮಾಡುವನು; ನಿಮ್ಮ ಕಾರ್ಯವನ್ನೆಲ್ಲಾ
ಸಫಲ ಮಾಡುವನು. ಇತರ ದೇಶಗಳಿಗೆ ಸಾಲ ಕೊಡಲು
ನಿಮ್ಮಲ್ಲಿ ಹಣವಿರುವುದು; ಬೇರೆಯವರಿಂದ ಸಾಲ
ತೆಗೆದುಕೊಳ್ಳುವ ಅವಶ್ಯಕತೆ ನಿಮಗೆ ಬಾರದು.
13ಯೆಹೋವನು ನಿಮ್ಮನ್ನು ತಲೆಯನ್ನಾಗಿ ಮಾಡಲು
ಬಯಸುತ್ತಾನೆಯೇ ಹೊರತು ಬಾಲವನ್ನಾಗಿಯಲ್ಲ.
ನೀವು ಮೇಲಿನ ಅಂತಸ್ತಿನಲ್ಲಿರಬೇಕು. ಕೆಳಗಿನದರಲ್ಲಿ
ಅಲ್ಲ. ನೀವು ಯೆಹೋವನ ಆಜ್ಞೆಯನ್ನು ಪಾಲಿಸಿದಾಗ
ನಿಮಗೆ ಹೀಗೆ ಆಗುವುದು. 14ನಾನು ಈ ಹೊತ್ತು
ಬೋಧಿಸುವ ಯಾವುದನ್ನೂ ನೀವು ಉಲ್ಲಂಘಿಸ
ಬಾರದು. ಇತರ ದೇವರುಗಳನ್ನು ಹಿಂಬಾಲಿಸಿ ಅವು
ಗಳನ್ನು ಪೂಜಿಸಬಾರದು.

### ಕಟ್ಟಳೆಗಳನ್ನು ಅನುಸರಿಸದಿದ್ದಲ್ಲಿ ಶಾಪ

15“ನಿಮ್ಮ ದೇವರಾದ ಯೆಹೋವನು ನಿಮಗೆ
ಕೊಡುವ ಆಜ್ಞೆ ಕಟ್ಟಳೆಗಳಿಗೆ ನೀವು ವಿಧೇಯರಾಗದಿದ್ದರೆ
ಈ ಕೆಟ್ಟ ಸಂಗತಿಗಳು ನಿಮಗೆ ತಟ್ಟುವವು:

16 “ನಿಮ್ಮ ಹೊಲದಲ್ಲಿಯೂ ನೀವು ವಾಸಿಸುವ
ಪಟ್ಟಣದಲ್ಲಿಯೂ ಯೆಹೋವನು ನಿಮ್ಮನ್ನು
ಶಪಿಸುವನು.
17 ನಿಮ್ಮ ಪುಟ್ಟಿಗಳನ್ನೂ ಪಾತ್ರೆಗಳನ್ನೂ ಆಹಾರ
ವಿಲ್ಲದಂತೆ ಬರಿದಾಗಿ ಮಾಡುವನು.
18 ನಿಮಗೆ ಹೆಚ್ಚು ಮಕ್ಕಳಿಲ್ಲದಂತೆ ಮಾಡುವನು.
ನಿಮ್ಮ ಹೊಲಗಳನ್ನು ಶಪಿಸಿ ನಿಮಗೆ ಹೆಚ್ಚು ಬೆಳೆ
ಯಾಗದಂತೆ ಮಾಡುವನು. ನಿಮ್ಮ ಪಶು ಪ್ರಾಣಿ
ಗಳನ್ನು ಶಪಿಸಿ ಅವುಗಳು ಮರಿಗಳನ್ನು ಈಯ
ದಂತೆ ಮಾಡುವನು. ಆತನು ನಿಮ್ಮ ಎಲ್ಲಾ ಮರಿ
ಗಳನ್ನೂ ಕರುಗಳನ್ನೂ ಶಪಿಸುವನು.
19 ನೀವು ಎಲ್ಲಾ ಸಮಯಗಳಲ್ಲಿ ಮಾಡುವ ಎಲ್ಲಾ
ಕೆಲಸ ಕಾರ್ಯಗಳನ್ನು ನಿಮ್ಮ ದೇವರಾದ
ಯೆಹೋವನು ಶಪಿಸುವನು.

20“ನೀವು ಕೆಟ್ಟಕಾರ್ಯಗಳನ್ನು ಮಾಡಿ ಯೆಹೋವ
ನಿಂದ ದೂರವಾಗಿ ಹೋದರೆ ನಿಮಗೆ ಕೆಟ್ಟಸಂಗತಿಗಳು
ಉಂಟಾಗುವವು. ನಿಮಗೆ ಉಪದ್ರವಗಳೂ ಮನಸ್ಸಿಗೆ
ಅಸಮಾಧಾನವೂ ಉಂಟಾಗುವವು. ನೀವು ಸಂಪೂರ್ಣ
ವಾಗಿ ನಾಶವಾಗುವ ತನಕ ಈ ಸಂಗತಿಗಳು ನಿಮ್ಮನ್ನು
ಬಾಧಿಸುವವು. ನೀವು ಆತನನ್ನು ತೊರೆದದ್ದರಿಂದ ನಿಮಗೆ
ಹಾಗೆ ಮಾಡುವನು. 21ನೀವು ಸ್ವಾಸ್ಥ್ಯವಾಗಿ ಹೊಂದಲಿರುವ
ದೇಶದಿಂದ ನೀವು ನಾಶವಾಗುವವರೆಗೆ, ನಿಮ್ಮ ದೇವ
ರಾದ ಯೆಹೋವನು ನಿಮಗೆ ಭಯಂಕರವಾದ ರೋಗ
ಗಳನ್ನು ಬರಮಾಡುವನು. 22ಜ್ವರ, ಬಾಧೆ, ದೇಹ ಊದಿ
ಕೊಳ್ಳುವಿಕೆ ಇವುಗಳಿಂದ ನಿಮ್ಮನ್ನು ಶಿಕ್ಷಿಸುವನು. ನಿಮ್ಮ
ದೇಶದೊಳಗೆ ಸಹಿಸಲಾರದ ಉಷ್ಣವನ್ನು ಕಳುಹಿಸಿ ಮಳೆ
ಬೀಳದಂತೆ ಮಾಡುವನು. ನಿನ್ನ ಬೆಳೆ ರೋಗದಿಂದಲೂ
ಬಿಸಿಲಿನಿಂದಲೂ ನಾಶವಾಗುವುದು. ಇವೆಲ್ಲಾ ನಿಮಗೆ
ಉಂಟಾಗಿ ನೀವು ನಾಶವಾಗುವ ತನಕ ಮುಂದ
ರಿಯುವವು. 23ಆಕಾಶದಲ್ಲಿ ಮೋಡಗಳೇ ಇರದ ಕಾದ

ಹಿತ್ತಾಳೆಯಂತಿರುವುದು. ಕಾಲಿನಡಿಯಲ್ಲಿರುವ ನೆಲವು
ಕಬ್ಬಿಣದಂತೆ ಗಟ್ಟಿಯಾಗಿರುವುದು. 24ಯೆಹೋವನು
ನಿಮಗೆ ಮಳೆಯನ್ನು ಬೀಳಮಾಡುವುದಿಲ್ಲ; ಕೇವಲ
ಧೂಳು ಮತ್ತು ಮರಳು ಆಕಾಶದಿಂದ ಬೀಳುವುದು.
ನೀವು ನಾಶವಾಗುವವರೆಗೆ ಅದು ಮೇಲಿನಿಂದ
ಬೀಳುತ್ತಿರುವುದು.

25“ನಿಮ್ಮ ವೈರಿಗಳು ಬಂದು ನಿಮ್ಮನ್ನು ಸೋಲಿಸಿಬಿಡು
ವಂತೆ ಮಾಡುವನು. ನೀವು ಒಂದು ದಾರಿಯಿಂದ ನಿಮ್ಮ
ವೈರಿಗೆ ಎದುರಾಗಿ ಯುದ್ಧಕ್ಕೆ ಇಳಿದರೆ ಏಳುದಾರಿಗಳಿಂದ
ರಣರಂಗದಿಂದ ಪಲಾಯನ ಮಾಡುವಿರಿ. ನಿಮಗೆ
ಸಂಭವಿಸುವ ಬಾಧೆಗಳನ್ನು ನೋಡಿ ಇತರ ಜನಾಂಗ
ದವರು ಭಯಪಡುವರು. 26ಕಾಡುಪಕ್ಷಿಗಳಿಗೆ ಮತ್ತು
ಕಾಡುಪ್ರಾಣಿಗಳಿಗೆ ನಿಮ್ಮ ಹೆಣಗಳು ಆಹಾರವಾಗುವವು.
ಅವುಗಳನ್ನು ಓಡಿಸಲು ಯಾರೂ ಇರುವುದಿಲ್ಲ.

27“ಈಜಿಪ್ಟಿನವರಿಗೆ ಕಳುಹಿಸಿದಂತೆ ನಿಮಗೂ
ಮೈಯಲ್ಲಿ ಬಾಧಿಸುವ ಹುಣ್ಣುಗಳನ್ನು ಕಳುಹಿಸುವನು.
ದೇಹದಲ್ಲಿ ಗಡ್ಡೆಗಳುಂಟಾಗುವವು. ಕೀವುಸೋರುವ
ಹುಣ್ಣುಗಳು, ಗುಣವಾಗದ ತುರಿಸುವ ಕಜ್ಜಿಗಳು ಉಂಟಾ
ಗುವವು. 28ಯೆಹೋವನು ನಿಮ್ಮನ್ನು ದಿಗ್ಭ್ರಾಂತರನ್ನಾಗಿ
ಮಾಡುವನು; ನಿಮ್ಮನ್ನು ಕುರುಡರನ್ನಾಗಿ ಮಾಡಿ ಗಲಿಬಿಲಿ
ಮಾಡುವನು.

29ಹಗಲಿನಲ್ಲೂ ಕುರುಡರಂತೆ ನೀವು ತಡವರಿಸುವಿರಿ.
ನೀವು ಮಾಡುವ ಕಾರ್ಯವೆಲ್ಲವೂ ನಿಷ್ಫಲವಾಗುವವು.
ಜನರು ನಿಮ್ಮನ್ನು ಬಾಧಿಸಿ ನಿಮ್ಮಲ್ಲಿರುವದನ್ನೆಲ್ಲಾ ದೋಚಿ
ಕೊಂಡು ಹೋಗುವರು. ನಿಮ್ಮನ್ನು ರಕ್ಷಿಸಲು ಯಾರೂ
ಬರುವುದಿಲ್ಲ.

30“ನೀವು ಮದುವೆಯಾಗಲು ಕನ್ನಿಕೆಯೊಂದಿಗೆ ನಿಶ್ಚಿ
ತಾರ್ಥ ಮಾಡಿಕೊಳ್ಳುವಿರಿ. ಆದರೆ ಬೇರೊಬ್ಬನು ಆಕೆ
ಯನ್ನು ಕೂಡುವನು. ನೀವೊಂದು ಮನೆಯನ್ನು ಕಟ್ಟು
ವಿರಿ. ಆದರೆ ಬೇರೊಬ್ಬನು ಅದರಲ್ಲಿ ವಾಸಿಸುವನು. ನೀವು
ದ್ರಾಕ್ಷಾತೋಟ ಮಾಡಿ ದ್ರಾಕ್ಷಾಲತೆಗಳನ್ನು ನೆಡುವಿರಿ.
ಆದರೆ ಅದರ ಫಲಗಳನ್ನು ನೀವು ಕೂಡಿಸುವುದಿಲ್ಲ.
31ನಿಮ್ಮ ದನಗಳನ್ನು ನಿಮ್ಮೆದುರಿನಲ್ಲಿ ಜನರು ಕೊಯ್ಯು
ವರು. ಆದರೆ ನೀವು ಅದರ ಮಾಂಸವನ್ನು ತಿನ್ನವುದಿಲ್ಲ.
ನಿಮ್ಮ ಕತ್ತೆಗಳನ್ನು ಜನರು ನಿಮ್ಮಿಂದ ತೆಗೆದುಕೊಂಡು
ಹೋಗುವರು. ಆದರೆ ಅವುಗಳನ್ನು ಹಿಂದಕ್ಕೆ ಕೊಡರು.
ನಿಮ್ಮ ಕುರಿಗಳನ್ನು ವೈರಿಗಳು ಕೊಂಡೊಯ್ಯುವರು.
ನಿಮ್ಮನ್ನು ರಕ್ಷಿಸಲು ಯಾರೂ ಬರಲಾರರು.

32“ನಿಮ್ಮ ಗಂಡುಹೆಣ್ಣು ಮಕ್ಕಳನ್ನು ಬೇರೆಯವರು
ಎತ್ತಿಕೊಂಡು ಹೋಗುವರು. ನೀವು ಹಗಲುರಾತ್ರಿ ನಿಮ್ಮ
ಮಕ್ಕಳಿಗಾಗಿ ಹುಡುಕಾಡುವಿರಿ. ಹುಡುಕಾಡುತ್ತಾ ನಿಮ್ಮ
ಕಣ್ಣುಗಳು ಕಂಗೆಡುವವು; ಆದರೆ ಅವರು ನಿಮಗೆ
ದೊರಕುವುದಿಲ್ಲ. ಯೆಹೋವನು ನಿಮಗೆ ಸಹಾಯ
ಮಾಡುವುದಿಲ್ಲ.

33“ನೀವು ಅರಿಯದಿರುವ ದೇಶದವರು ಬಂದು ನಿಮ್ಮ
ಪೈರನ್ನು ಕೊಯ್ದುಕೊಂಡು ಹೋಗುವರು; ನೀವು
ದುಡಿದು ಸಂಪಾದಿಸಿದವುಗಳನ್ನು ಎತ್ತಿಕೊಂಡು ಹೋಗು
ವರು. ಜನರು ನಿಮ್ಮನ್ನು ಕುಗ್ಗಿಸಿ ಬಲಹೀನರನ್ನಾಗಿ
ಮಾಡುವರು. 34ನೀವು ನೋಡುವ ಸಂಗತಿಗಳು ನಿಮ್ಮನ್ನು
ಹುಚ್ಚರನ್ನಾಗಿ ಮಾಡುತ್ತವೆ. 35ಯೆಹೋವನು ನಿಮ್ಮನ್ನು
ಉರಿಯುವ ಹುಣ್ಣುಗಳಿಂದ ಬಾಧಿಸುವನು; ಅವುಗಳು
ಗುಣವಾಗುವುದಿಲ್ಲ. ಈ ಹುಣ್ಣುಗಳು ನಿಮ್ಮ ದೇಹದ
ಎಲ್ಲಾ ಭಾಗಗಳಲ್ಲಿ ಅಂದರೆ ನಿಮ್ಮ ಪಾದದಿಂದ ಹಿಡಿದು
ನಡುನೆತ್ತಿಯ ತನಕ ಇರುವವು.

36“ಯೆಹೋವನು ನಿಮ್ಮನ್ನೂ ನಿಮ್ಮ ಅರಸನನ್ನೂ
ನೀವು ಅರಿಯದ ದೇಶಕ್ಕೆ ಅಟ್ಟಿಬಿಡುವನು. ನೀವಾಗಲೀ
ನಿಮ್ಮ ಪೂರ್ವಿಕರಾಗಲೀ ಆ ದೇಶವನ್ನು ಎಂದೂ ನೋಡ
ಲಿಲ್ಲ. ಅಲ್ಲಿ ಮರ, ಕಲ್ಲುಗಳಿಂದ ಮಾಡಿದ ಸುಳ್ಳು ದೇವ
ರನ್ನು ಆರಾಧಿಸುವಿರಿ. 37ನೀವು ಯಾವ ದೇಶಕ್ಕೆ
ಕಳುಹಿಸಲ್ಪಡುವಿರೋ ಆ ದೇಶದವರು ನಿಮ್ಮ ದುರವಸ್ಥೆ
ಯನ್ನು ನೋಡಿ ನಗುವರು; ಕೆಟ್ಟಮಾತುಗಳನ್ನಾಡುವರು.

## ಸೋಲು

38“ಹೊಲದಲ್ಲಿ ಧಾನ್ಯ ಯಥೇಚ್ಛವಾಗಿ ಬೆಳೆದರೂ
ನೀವು ಮನೆಯೊಳಗೆ ತರುವುದು ಸ್ವಲ್ಪ ಮಾತ್ರ. ಮಿಡ
ತೆಯು ನಿಮ್ಮ ಬೆಳೆಯನ್ನು ತಿಂದುಬಿಡುವದು. 39ನೀವು
ದ್ರಾಕ್ಷಾತೋಟ ಮಾಡಿ ಪ್ರಯಾಸಪಟ್ಟು ಅದರಲ್ಲಿ ಕೆಲಸ
ಮಾಡುವಿರಿ. ಆದರೆ ಅದರ ಫಲವನ್ನು ಹುಳುಗಳು ತಿಂದು
ಬಿಡುವುದರಿಂದ ನೀವು ದ್ರಾಕ್ಷಿಯನ್ನು ಸಂಗ್ರಹಿಸುವು
ದಿಲ್ಲ; ದ್ರಾಕ್ಷಾರಸವನ್ನು ಕುಡಿಯುವುದಿಲ್ಲ. 40ನಿಮ್ಮ
ಭೂಮಿಯಲ್ಲಿ ಆಲಿವ್ ಮರಗಳು ತುಂಬಿದ್ದರೂ
ಎಣ್ಣೆಯ ಬರದಲ್ಲಿ ಸಂಕಟಪಡುವಿರಿ. ಯಾಕಂದರೆ
ಆಲಿವ್ ಕಾಯಿಯು ಭೂಮಿಯ ಮೇಲೆ ಉದುರಿಬಿದ್ದು
ಹಾಳಾಗುವವು. 41ನಿಮಗೆ ಗಂಡುಹೆಣ್ಣು ಮಕ್ಕಳು
ಹುಟ್ಟುವರು. ಆದರೆ ಅವರು ನಿಮ್ಮೊಂದಿಗೆ ಇರುವುದಿಲ್ಲ.
ಅವರು ಸೆರೆಹಿಡಿಯಲ್ಪಟ್ಟು ಒಯ್ಯಲ್ಪಡುವರು. 42ನಿಮ್ಮ
ತೋಟದ ಎಲ್ಲಾ ಮರಗಳನ್ನೂ ಹೊಲದ ಪೈರುಗಳನ್ನೂ
ಮಿಡತೆಗಳು ತಿಂದುಬಿಡುವದು. 43ನಿಮ್ಮ ಮಧ್ಯದಲ್ಲಿ
ವಾಸಿಸುವ ಅನ್ಯರು ಬಲಿಷ್ಠರಾಗುವರು, ನೀವಾದರೋ
ಬಲಹೀನರಾಗುವಿರಿ. 44ನಿಮಗೆ ಸಾಲ ಕೊಡಲು
ವಿದೇಶಿಯರಿಗೆ ಹಣವಿರುವುದು. ಆದರೆ ಅವರಿಗೆ ಸಾಲ
ಕೊಡಲು ನಿಮ್ಮಲ್ಲಿ ಹಣವಿರುವುದಿಲ್ಲ. ತಲೆಯು ದೇಹ
ವನ್ನು ಹೇಗೆ ಹಿಡಿತದಲ್ಲಿಟ್ಟುಕೊಂಡಿರುತ್ತದೋ
ಹಾಗೆಯೇ ಅವರು ನಿಮ್ಮನ್ನು ತಮ್ಮ ಹಿಡಿತದಲ್ಲಿಟ್ಟು
ಕೊಳ್ಳುವರು. ನೀವು ಅವರಿಗೆ ಬಾಲದಂತಿರುವಿರಿ.

45‘‘ನಿಮ್ಮ ದೇವರಾದ ಯೆಹೋವನು ಹೇಳಿದ ಸಂಗತಿ
ಗಳಿಗೆ ನೀವು ಕಿವಿಗೊಡದೆ ಹೋದದ್ದರಿಂದ, ಆತನು
ಕೊಟ್ಟ ಆಜ್ಞೆಗಳಿಗೂ ನಿಯಮಗಳಿಗೂ ನೀವು ವಿಧೇಯ
ರಾಗದಿದ್ದ ಕಾರಣ ಈ ಶಾಪಗಳೆಲ್ಲಾ ನಿಮ್ಮ ಮೇಲೆ
ಬರುತ್ತವೆ. ನೀವು ನಾಶವಾಗುವವರೆಗೂ ಅವು ನಿಮ್ಮನ್ನು
ಅಟ್ಟಿಸಿಕೊಂಡು ಬರುತ್ತವೆ. 46ನೀವೂ ನಿಮ್ಮ ಸಂತತಿ
ಯವರೂ ದೇವರ ಶಾಶ್ವತವಾದ ತೀರ್ಪನ್ನು ಹೊಂದಿದ್ದೀ
ರೆಂಬುದಕ್ಕೆ ಬೇರೆಯವರಿಗೆ ಈ ಶಾಪಗಳೇ ಸೂಚನೆ
ಯಾಗಿಯೂ ರುಜುವಾತಾಗಿಯೂ ಇರುತ್ತವೆ.

47‘‘ನಿಮ್ಮ ದೇವರಾದ ಯೆಹೋವನು ನಿಮಗೆ ಹೆಚ್ಚಾದ
ಆಶೀರ್ವಾದವನ್ನು ಕೊಟ್ಟನು. ಆದರೆ ನೀವು ಸಂತೋಷ
ಮತ್ತು ಉಪಕಾರದ ಹೃದಯದಿಂದ ಆತನ ಸೇವೆ ಮಾಡ
ಲಿಲ್ಲ. 48ಆದುದರಿಂದ ಆತನು ನಿಮ್ಮ ವೈರಿಗಳನ್ನು ಕಳುಹಿಸಿ
ಅವರ ಸೇವೆ ನೀವು ಮಾಡುವಂತೆ ಮಾಡುವನು. ನೀವು
ಹಸಿವು ಬಾಯಾರಿಕೆಗಳಿಂದ ಬಳಲುವಿರಿ; ಬಟ್ಟೆಯಿಲ್ಲದೆ
ಬಡವರಾಗಿ ಜೀವಿಸುವಿರಿ. ನಿಮ್ಮ ಯೆಹೋವನು ನಿಮ್ಮ
ಮೇಲೆ ಭಾರವನ್ನು ಹೊರಿಸುವನು. ಆ ಭಾರವನ್ನು
ನಿಮ್ಮಿಂದ ತೆಗೆಯಲಾಗುವುದಿಲ್ಲ; ನೀವು ನಾಶವಾಗುವಿರಿ.

### ವೈರಿಜನಾಂಗದ ಶಾಪ

49‘‘ಬಹಳ ದೂರದಿಂದ ಒಂದು ಜನಾಂಗವು
ನಿಮ್ಮೊಂದಿಗೆ ಯುದ್ಧಮಾಡಲು ಬರುವಂತೆ ಯೆಹೋ
ವನು ಮಾಡುವನು. ನೀವು ಅವರ ಭಾಷೆಯನ್ನು ಅರಿಯ
ದಿರುವಿರಿ. ಆಕಾಶದಿಂದ ಹದ್ದು ಹಾರಿಬರುವಂತೆ ಅತಿ
ವೇಗವಾಗಿ ಅವರು ನಿಮ್ಮ ಮೇಲೆ ಬೀಳುವರು. 50ಅವರು
ಮಹಾಕ್ರೂರಿಗಳು. ಅವರು ನಿಮ್ಮಲ್ಲಿರುವ ಮುದುಕರಿಗೆ
ಅಥವಾ ಎಳೆಗೂಸುಗಳಿಗೆ ಕರುಣೆ ತೋರಿಸರು. 51ಅವರು
ನಿಮ್ಮ ಪಶುಗಳನ್ನು ಅಟ್ಟಿಸಿಕೊಂಡು ಹೋಗುವರು; ನೀವು
ಬೆಳೆದ ಬೆಳೆಯನ್ನು ಕೊಂಡೊಯ್ಯುವರು. ನಿಮ್ಮನ್ನು ನಾಶ
ಪಡಿಸುವ ತನಕ ಅವರು ಪ್ರತಿಯೊಂದನ್ನೂ ತೆಗೆದು
ಕೊಂಡು ಹೋಗುವರು. ಅವರು ನಿಮಗೆ ದವಸಧಾನ್ಯವ
ನ್ನಾಗಲೀ ದ್ರಾಕ್ಷಾರಸವನ್ನಾಗಲೀ ಎಣ್ಣೆಯನ್ನಾಗಲೀ ಹಸು
ಗಳನ್ನಾಗಲೀ ಕುರಿಗಳನ್ನಾಗಲೀ ಮೇಕೆಗಳನ್ನಾಗಲೀ
ಬಿಟ್ಟುಹೋಗುವುದಿಲ್ಲ. ಅವರು ನಿಮ್ಮನ್ನು ನಾಶಪಡಿಸು
ವತನಕ ಪ್ರತಿಯೊಂದನ್ನೂ ತೆಗೆದುಕೊಂಡು
ಹೋಗುವರು.

52‘‘ಆ ವೈರಿಗಳು ನಿಮ್ಮ ಪಟ್ಟಣಗಳನ್ನೆಲ್ಲಾ ಮುತ್ತಿ
ವಶಪಡಿಸಿಕೊಳ್ಳುವರು. ಆ ಪಟ್ಟಣಗಳಿಗೆ ಎತ್ತರದ ಪೌಳಿ
ಗೋಡೆಗಳಿವೆ. ಆದುದರಿಂದ ನಮಗೆ ಭಯವಿಲ್ಲವೆಂದು
ನೀವು ಭರವಸೆಯಿಂದಿರುವಿರಿ. ಆದರೆ ಅವರು ಪೌಳಿ
ಗೋಡೆಗಳನ್ನು ಕೆಡವಿ ನೆಲಸಮ ಮಾಡುವರು. ದೇವ
ರಾದ ಯೆಹೋವನು ನಿಮಗೆ ಕೊಟ್ಟಿರುವ ಪಟ್ಟಣ
ಗಳಲ್ಲೆಲ್ಲಾ ತೊಂದರೆ ಮಾಡುವರು. 53ವೈರಿಗಳು ನಿಮ್ಮ
ಪಟ್ಟಣವನ್ನು ಮುತ್ತಿಗೆ ಹಾಕಿದಾಗ ನೀವು ಸಂಕಟ ಅನು
ಭಸುವಿರಿ. ಆಗ ನೀವು ಊಟಕ್ಕೆ ಇಲ್ಲದೆ ತೊಂದರೆ
ಗೊಳಗಾಗುವಿರಿ; ಹಸಿವು ತಾಳಲಾರದೆ ನಿಮ್ಮ ಮಕ್ಕಳನ್ನೇ
ತಿನ್ನುವಿರಿ.

54‘‘ನಿಮ್ಮಲ್ಲಿರುವ ಮೃದುವಾದ ಮತ್ತು ಕನಿಕರವುಳ್ಳ
ಮನುಷ್ಯನೂ ಬೇರೆಯವರಿಗೆ ಕ್ರೂರಿಯಾಗುವನು;
ತನ್ನನ್ನು ಬಹಳವಾಗಿ ಪ್ರೀತಿಸುವ ಹೆಂಡತಿಗೂ ಅವನು
ಕ್ರೂರಿಯಾಗುವನು; ಇನ್ನೂ ಜೀವಂತವಾಗಿರುವ ತನ್ನ
ಮಕ್ಕಳಿಗೂ ಅವನು ಕ್ರೂರಿಯಾಗುವನು. 55ಅವನಿಗೆ
ಊಟಕ್ಕೇನೂ ಇಲ್ಲದಿರುವುದರಿಂದ ಸ್ವಂತ ಮಕ್ಕಳನ್ನೇ
ತಿನ್ನುವನು. ಅವರನ್ನು ಇತರರೊಂದಿಗೆ ಹಂಚಿಕೊಳ್ಳದೆ,
ತನ್ನ ಸ್ವಂತ ಕುಟುಂಬದವರೊಂದಿಗೆ ಹಂಚಿಕೊಳ್ಳದೆ
ತಾನೊಬ್ಬನೆ ತಿನ್ನುವನು. ನಿಮ್ಮ ವೈರಿಗಳು ಬಂದು ನಿಮ್ಮ
ಪಟ್ಟಣಕ್ಕೆ ಮುತ್ತಿಗೆ ಹಾಕಿದಾಗ ನಿಮಗೆ ಇವೆಲ್ಲಾ
ಸಂಭವಿಸುತ್ತವೆ.

56‘‘ನಿಮ್ಮಲ್ಲಿರುವ ಅತ್ಯಂತ ಮೃದುವಾದ ಮತ್ತು ಕನಿಕರ
ವುಳ್ಳ ಸ್ತ್ರೀಯೂ ಕ್ರೂರಿಯಾಗುವಳು. ನೆಲದ ಮೇಲೆ ಬರಿ
ಗಾಲಿನಲ್ಲಿ ಎಂದೂ ನಡೆಯದಷ್ಟು ಮೃದುವೂ ಕೋಮ
ಲೆಯೂ ಆಗಿದ್ದ ಆಕೆ ತನ್ನನ್ನು ಬಹಳವಾಗಿ ಪ್ರೀತಿಸುವ
ಗಂಡನಿಗೇ ಕ್ರೂರಿಯಾಗುವಳು; ಅವಳು ತನ್ನ ಸ್ವಂತ
ಮಗನಿಗೂ ಮಗಳಿಗೂ ಕ್ರೂರಿಯಾಗುವಳು. 57ಅವಳು
ಅಡಗಿಕೊಂಡು ಮಗುವನ್ನು ಹೆರುವಳು. ಬಳಿಕ ಆ ಮಗು
ವನ್ನೂ ಆದರೊಡನೆ ಬರುವುದೆಲ್ಲವನ್ನೂ ಭಯಂಕರ
ವಾದ ಹಸಿವೆಯಿಂದಾಗಿ ತಿಂದುಬಿಡುವಳು. ನಿಮ್ಮ
ಶತ್ರುವು ಬಂದು ನಿಮ್ಮ ಪಟ್ಟಣಗಳಿಗೆ ಮುತ್ತಿಗೆ ಹಾಕಿ
ನಿಮ್ಮನ್ನು ಸಂಕಟಕ್ಕೆ ಗುರಿಮಾಡಿದಾಗ ಈ ಕೆಟ್ಟ
ಸಂಗತಿಗಳೆಲ್ಲಾ ನಿಮಗೆ ಸಂಭವಿಸುತ್ತವೆ.

58‘‘ಈ ಪುಸ್ತಕದಲ್ಲಿ ಬರೆದಿರುವ ಎಲ್ಲಾ ಆಜ್ಞೆಗಳಿಗೂ
ಉಪದೇಶಗಳಿಗೂ ನೀವು ವಿಧೇಯರಾಗಬೇಕು. ನಿಮ್ಮ
ದೇವರಾದ ಯೆಹೋವನು ಅದ್ಭುತವೂ ಭಯಂಕರವೂ
ಆಗಿರುವುದರಿಂದ ಆತನ ಹೆಸರನ್ನು ನೀವು ಗೌರವಿಸ
ಬೇಕು. 59ನಿಮಗೂ ನಿಮ್ಮ ಸಂತತಿಯವರಿಗೂ ಅನೇಕ
ತೊಂದರೆಗಳನ್ನು ಕೊಡುವನು. ಆ ತೊಂದರೆಗಳು ಮತ್ತು
ರೋಗಗಳು ಭಯಂಕರವಾಗಿವೆ. 60ನೀವು ಈಜಿಪ್ಟಿ
ನಲ್ಲಿರುವಾಗ ದೇವರು ಅವರಿಗೆ ಕಳುಹಿಸಿದ ವ್ಯಾಧಿ ಸಂಕಟ
ಗಳನ್ನು ನೋಡಿ ಭಯಗ್ರಸ್ತರಾದಿರಿ. ಅಂಥ ಸಂಕಟಗಳು
ನಿಮಗೆ ಬರುವವು. 61ಈ ಪುಸ್ತಕದಲ್ಲಿ ಬರೆದಿಲ್ಲದ
ಸಂಕಟಗಳೂ ರೋಗಗಳು ನಿಮಗೆ ಪ್ರಾಪ್ತಿಯಾಗುವವು.
ನೀವು ನಾಶವಾಗುವ ತನಕ ಅವೆಲ್ಲಾ ನಿಮಗೆ ಬರುತ್ತವೆ.
62ನೀವು ಆಕಾಶದ ನಕ್ಷತ್ರದಷ್ಟು ಅಸಂಖ್ಯಾತರಾಗಿದ್ದರೂ

ನಿಮ್ಮಲ್ಲಿ ಕೆಲವರೇ ಉಳಿದುಕೊಳ್ಳುವರು. ಯಾಕಂದರೆ
ನೀವು ನಿಮ್ಮ ದೇವರಾದ ಯೆಹೋವನಿಗೆ ಕಿವಿಗೊಡಲಿಲ್ಲ.
63‘‘ಯೆಹೋವನು ನಿಮ್ಮ ಅಭಿವೃದ್ಧಿಯಲ್ಲಿ ಸಂತೋಷ
ಪಡುವಂತೆ ನಿಮ್ಮ ಅವನತಿಯಲ್ಲಿಯೂ ನಿಮ್ಮ ನಾಶನ
ದಲ್ಲಿಯೂ ಸಂತೋಷಪಡುವನು. ನೀವು ಆ ದೇಶವನ್ನು
ನಿಮ್ಮದನ್ನಾಗಿಸಿಕೊಳ್ಳಲು ಹೋಗುವಿರಿ. ಆದರೆ ಜನರು
ನಿಮ್ಮನ್ನು ದೇಶದಿಂದ ಹೊರಡಿಸಿ ಅಟ್ಟಿಬಿಡುವರು.
64ಯೆಹೋವನು ನಿಮ್ಮನ್ನು ಲೋಕದ ಎಲ್ಲಾ ದೇಶಗಳಿಗೆ
ಚದರಿಸಿಬಿಡುವನು. ಆತನು ಪ್ರಪಂಚದ ಒಂದು ಕಡೆ
ಯಿಂದ ಇನ್ನೊಂದು ಕಡೆಯ ತನಕ ನಿಮ್ಮನ್ನು ಚದರಿಸು
ವನು. ಅಲ್ಲಿ ನೀವು ಕಲ್ಲು ಮರಗಳಿಂದ ಮಾಡಿದ ದೇವರು
ಗಳನ್ನು ಪೂಜಿಸುವಿರಿ. ಆ ಸುಳ್ಳುದೇವರುಗಳನ್ನು ನೀವಾ
ಗಲೀ ನಿಮ್ಮ ಪೂರ್ವಿಕರಾಗಲೀ ಎಂದೂ ಪೂಜಿಸಿರಲಿಲ್ಲ.
65‘‘ಆ ಜನಾಂಗದವರೊಂದಿಗೆ ಜೀವಿಸುವಾಗ ನಿಮಗೆ
ಸಮಾಧಾನವಿರುವುದಿಲ್ಲ; ನಿಮಗೆ ವಿಶ್ರಾಂತಿ ಇರುವು
ದಿಲ್ಲ. ನಿಮ್ಮ ಯೆಹೋವನು ನಿಮಗೆ ಚಿಂತೆ ಬೇಸರಗಳನ್ನು
ತಂದು ತುಂಬಿಸುವನು. ನಿಮ್ಮ ಕಣ್ಣುಗಳು ಆಯಾಸದಿಂದ
ತುಂಬಿರುವವು; ನೀವು ಕಳವಳದಿಂದಿರುವಿರಿ. 66ನೀವು
ಹಗಲಿರುಳು ಭಯದಿಂದಿರುವಿರಿ ಮತ್ತು ಅಪಾಯದಲ್ಲಿ
ಜೀವಿಸುವಿರಿ. ನಿಮ್ಮ ಜೀವಿತದ ಬಗ್ಗೆ ನಿಮಗೆಂದಿಗೂ
ನಿಶ್ಚಯತ್ವವಿರುವುದಿಲ್ಲ. 67ಮುಂಜಾನೆಯಲ್ಲಿ ನೀವು,
‘ಇದು ಸಾಯಂಕಾಲವಾಗಿದ್ದರೆ ಉತ್ತಮವಾಗಿರುತ್ತಿತ್ತು’
ಎಂದು ಅನ್ನುವಿರಿ. ಸಾಯಂಕಾಲದಲ್ಲಿ, ‘ಇದು
ಮುಂಜಾನೆಯಾಗಿದ್ದರೆ ಉತ್ತಮವಾಗಿರುತ್ತಿತ್ತು’ ಎಂದು
ಅನ್ನುವಿರಿ. ನಿಮ್ಮ ಹೃದಯದಲ್ಲಿರುವ ಭಯ ಮತ್ತು ನೀವು
ಕಣ್ಣಾರೆ ಕಾಣುವ ಭಯಂಕರ ಸಂಗತಿಗಳೇ ಇದಕ್ಕೆ
ಕಾರಣ. 68ಯೆಹೋವನು ನಿಮ್ಮನ್ನು ಹಡಗುಗಳ
ಮುಖಾಂತರ ಈಜಿಪ್ಟಿಗೆ ಕೊಂಡೊಯ್ಯುವನು. ನೀವು
ಅಲ್ಲಿಗೆ ಹೋಗುವುದೇ ಇಲ್ಲವೆಂದು ನಾನು ಹೇಳಿದ್ದೆನು.
ಆದರೆ ದೇವರು ನಿಮ್ಮನ್ನು ಅಲ್ಲಿಗೆ ಕಳುಹಿಸುವನು.
ಈಜಿಪ್ಟಿನಲ್ಲಿ ನಿಮ್ಮನ್ನು ನೀವೇ ಗುಲಾಮರನ್ನಾಗಿ ನಿಮ್ಮ
ವೈರಿಗಳಿಗೆ ಮಾರಿಕೊಳ್ಳುವಿರಿ; ಆದರೆ ಯಾರೂ ನಿಮ್ಮನ್ನು
ಕೊಂಡುಕೊಳ್ಳುವವರಿರುವುದಿಲ್ಲ.’’

### ಮೋವಾಬ್ಯರೊಂದಿಗೆ ಒಡಂಬಡಿಕೆ

29 ಇಸ್ರೇಲ್ ಜನಾಂಗದೊಂದಿಗೆ ಹೋರೇಬ್
ಬೆಟ್ಟದಲ್ಲಿ ಯೆಹೋವನು ಒಂದು ಒಡಂಬಡಿಕೆ
ಯನ್ನು ಮಾಡಿಕೊಂಡನು. ಅಲ್ಲದೆ ಇಸ್ರೇಲರು
ಮೋವಾಬ್ ಪ್ರಾಂತ್ಯದಲ್ಲಿದ್ದಾಗ ಯೆಹೋವನು
ಮೋಶೆಗೆ ಅವರೊಡನೆ ಇನ್ನೊಂದು ಒಡಂಬಡಿಕೆಯನ್ನು
ಮಾಡಿಕೊಳ್ಳಲು ಹೇಳಿದನು. ಅದು ಯಾವುದೆಂದರೆ:

2ಮೋಶೆಯು ಇಸ್ರೇಲರ ಜನಸಮೂಹವನ್ನು ಕರೆದು,
‘‘ಈಜಿಪ್ಟ್ ದೇಶದಲ್ಲಿ ಯೆಹೋವನು ನಡಿಸಿದ ಕಾರ್ಯ
ಗಳನ್ನೆಲ್ಲಾ ನೀವು ನೋಡಿದ್ದೀರಿ. ಆತನು ಫರೋಹನಿಗೂ
ಅವನ ಪರಿವಾರದವರಿಗೂ ಮತ್ತು ಇಡೀ ಈಜಿಪ್ಟಿನವ
ರಿಗೂ ಮಾಡಿದ್ದನ್ನೆಲ್ಲಾ ನೀವು ನೋಡಿದ್ದೀರಿ. 3ಅವರಿಗೆ
ಕೊಟ್ಟಂಥ ಭಯಂಕರ ಸಂಕಟಗಳನ್ನು ನೋಡಿದಿರಿ;
ಆತನು ನಡಿಸಿದ ಅದ್ಭುತಕಾರ್ಯಗಳನ್ನು ನೋಡಿದಿರಿ.
4ಆದರೆ ಇಂದಿನ ತನಕವೂ ನೀವು ಅದನ್ನು ಸಂಪೂರ್ಣ
ವಾಗಿ ಅರಿಯಲಿಲ್ಲ. ನೀವು ಕಂಡವುಗಳನ್ನು ಮತ್ತು
ಕೇಳಿದವುಗಳನ್ನು ನಿಜವಾಗಿಯೂ ಅರ್ಥಮಾಡಿಕೊಳ್ಳ
ದಂತೆ ಯೆಹೋವನು ಮಾಡಿದನು. 5ನಲವತ್ತು ವರ್ಷಗಳ
ತನಕ ಯೆಹೋವನು ನಿಮ್ಮನ್ನು ಅಡವಿಯಲ್ಲಿ ನಡೆಸಿದನು.
ಆದರೆ ನಿಮ್ಮ ಬಟ್ಟೆಗಳು ಜೀರ್ಣವಾಗಲಿಲ್ಲ ಮತ್ತು ಕಾಲಿಗೆ
ಹಾಕಿದ ಕೆರಗಳು ಸವೆಯಲಿಲ್ಲ. 6ನಿಮ್ಮಲ್ಲಿ ಆಹಾರ
ವಿರಲಿಲ್ಲ; ಕುಡಿಯಲು ದ್ರಾಕ್ಷಾರಸವಾಗಲೀ ಪಾನೀಯ
ವಾಗಲೀ ಇರಲಿಲ್ಲ. ಆದರೆ ಯೆಹೋವನು ಮನ್ನವನ್ನು
ಮತ್ತು ನೀರನ್ನು ಕೊಟ್ಟನು. ಆತನೇ ನಿಮ್ಮ ದೇವರಾದ
ಯೆಹೋವನೆಂದು ನೀವು ಅರಿತುಕೊಳ್ಳುವ ಹಾಗೆ
ಮಾಡಿದನು.

7‘‘ನಾವು ಈ ಸ್ಥಳಕ್ಕೆ ಬಂದಾಗ ಹೆಪ್ಬೋನಿನ ರಾಜ
ಸೀಹೋನ ಮತ್ತು ಬಾಷಾನಿನ ರಾಜ ಓಗನು ನಮ್ಮೊಂದಿಗೆ
ಯುದ್ಧ ಮಾಡಲು ಬಂದರು. ನಾವು ಅವರನ್ನು ಸೋಲಿಸಿ
ದೆವು. 8ನಾವು ಅವರ ದೇಶವನ್ನು ರೂಬೇನ್, ಗಾದ್
ಮತ್ತು ಮನಸ್ಸೆಯ ಅರ್ಧಕುಲದವರಿಗೆ ಹಂಚಿದೆವು.
9ನೀವು ದೇವರೊಡನೆ ಮಾಡಿದ ಒಪ್ಪಂದವನ್ನು ಪಾಲಿ
ಸುತ್ತಾ ಬಂದರೆ ನೀವು ನಿಮ್ಮ ಕಾರ್ಯಗಳಲ್ಲಿ ಜಯವನ್ನು
ಹೊಂದುವಿರಿ.

10‘‘ಈ ದಿನ ನೀವೆಲ್ಲರೂ ದೇವರ ಮುಂದೆ ನಿಂತಿದ್ದೀರಿ.
ನಿಮ್ಮ ನಾಯಕರು, ಹಿರಿಯರು ನಿಮ್ಮ ಜನರೆಲ್ಲಾ ಇಲ್ಲಿ
ಇರುವಿರಿ. 11ನಿಮ್ಮ ಹೆಂಡತಿಮಕ್ಕಳೂ, ನಿಮ್ಮೊಂದಿಗಿರುವ
ಪರದೇಶಸ್ಥರೂ ನಿಮ್ಮ ಸೇವೆ ಮಾಡುವವರೂ ಇದ್ದಾರೆ.
12ನೀವೆಲ್ಲಾ ನಿಮ್ಮ ದೇವರಾದ ಯೆಹೋವನೊಂದಿಗೆ
ಒಡಂಬಡಿಕೆಯನ್ನು ಮಾಡುವುದಕ್ಕೋಸ್ಕರ ನಿಂತಿದ್ದೀರಿ.
ದೇವರು ನಿಮ್ಮೊಂದಿಗೆ ಒಡಂಬಡಿಕೆಯನ್ನು ಮಾಡುತ್ತಾನೆ.
13ಈ ಒಡಂಬಡಿಕೆಯ ಮೂಲಕ ದೇವರು ನಿಮ್ಮನ್ನು ತನ್ನ
ಸ್ವಕೀಯ ಪ್ರಜೆಯನ್ನಾಗಿ ಮಾಡುತ್ತಾನೆ. ಆತನು ನಿಮಗೆ
ದೇವರಾಗಿದ್ದಾನೆ. ನಿಮ್ಮ ಪೂರ್ವಿಕರಾದ ಅಬ್ರಹಾಮ
ನಿಗೆ, ಇಸಾಕನಿಗೆ, ಯಾಕೋಬನಿಗೆ ಹೇಳಿದಂತೆ ನಿಮಗೂ
ಹೇಳುತ್ತಾನೆ. 14ಯೆಹೋವನು ವಾಗ್ದಾನಗಳನ್ನು ಒಳ
ಗೊಂಡ ಒಡಂಬಡಿಕೆಯನ್ನು ನಿಮ್ಮೊಂದಿಗೆ ಮಾತ್ರ
ಮಾಡದೆ ಇಲ್ಲಿ ಕೂಡಿಬಂದಿರುವ ಎಲ್ಲರೊಂದಿಗೂ
ಮಾಡುತ್ತಾನೆ. 15ಇಂದು ನಮ್ಮ ದೇವರಾದ ಯೆಹೋವನ

ಸನ್ನಿಧಿಯಲ್ಲಿ ಇಲ್ಲಿ ನಿಂತಿರುವ ನಮ್ಮೆಲ್ಲರೊಂದಿಗೂ
ಇಂದು ನಮ್ಮೊಂದಿಗಿಲ್ಲದ ನಮ್ಮ ಸಂತತಿಯವರಿಗೂ
ಆತನು ಈ ಒಡಂಬಡಿಕೆಯನ್ನು ಮಾಡುತ್ತಿದ್ದಾನೆ. [16]ನಾವು
ಈಜಿಪ್ಟಿನಲ್ಲಿ ಹೇಗೆ ಜೀವಿಸುತ್ತಿದ್ದೆವೆಂಬದನ್ನೂ, ನಾವು
ಇಲ್ಲಿಗೆ ಬರುವಾಗ ಹೇಗೆ ದೇಶಗಳನ್ನು ದಾಟಿಕೊಂಡು
ಬಂದೆವೆಂಬುದನ್ನೂ ಸ್ಮರಿಸಿರಿ. [17]ನೀವು ಅವರ ಅಸಹ್ಯ
ವಾದ ವಿಗ್ರಹಗಳನ್ನು ನೋಡಿದಿರಿ. ಅವುಗಳು ಮರ,
ಕಲ್ಲು, ಬೆಳ್ಳಿ ಬಂಗಾರಗಳಿಂದ ಕೆತ್ತಲ್ಪಟ್ಟವುಗಳಾಗಿದ್ದವು.
[18]ಇಲ್ಲಿರುವ ಯಾವ ಪುರುಷನಾಗಲೀ, ಸ್ತ್ರೀಯಾಗಲೀ,
ಯಾವ ಗೋತ್ರದವರಾಗಲೀ ನಿಮ್ಮ ದೇವರಾದ
ಯೆಹೋವನನ್ನು ಬಿಟ್ಟುಹೋಗದಂತೆ ನೋಡಿಕೊಳ್ಳಿರಿ.
ಯಾವನೂ ಹೋಗಿ ಬೇರೆ ಜನಾಂಗಗಳ ದೇವರುಗಳ
ಸೇವೆಮಾಡಬಾರದು. ಅಂಥದ್ದನ್ನು ಮಾಡುವ ಜನರು
ಕಹಿಯಾದ ಮತ್ತು ವಿಷಭರಿತವಾದ ಹಣ್ಣನ್ನು ಬಿಡುವ
ಗಿಡದಂತಿದ್ದಾರೆ.

[19]''ನಾನು ತಿಳಿಸಿದ ಶಾಪವನ್ನೆಲ್ಲಾ ಕೇಳಿಸಿಕೊಂಡು,
'ನಾನು ನನ್ನ ಇಷ್ಟ ಬಂದಂತೆ ಮಾಡುತ್ತೇನೆ. ನನಗೆ ಯಾವ
ಕೇಡೂ ಆಗುವುದಿಲ್ಲ' ಎಂದು ಯಾವನಾದರೂ ಹೇಳಿ
ಕೊಂಡು ತನ್ನನ್ನು ತಾನೇ ಸಮಾಧಾನ ಪಡಿಸಿಕೊಂಡರೆ,
ಅವನು ತನಗೆ ಮಾತ್ರವಲ್ಲ ಎಲ್ಲಾ ಒಳ್ಳೆಯ ಜನರಿಗೂ
ಕೇಡಾಗುವಂತೆ ಮಾಡುತ್ತಾನೆ. [20-21]ಯೆಹೋವನು ಆ
ಮನುಷ್ಯನನ್ನು ಕ್ಷಮಿಸುವುದಿಲ್ಲ. ಅವನ ಮೇಲೆ ಕೋಪ
ಗೊಂಡು ಅವನನ್ನು ಶಿಕ್ಷಿಸುವನು. ಅವನನ್ನು ಇಸ್ರೇಲ್
ಕುಲಗಳಿಂದ ತೆಗೆದುಹಾಕುವನು. ಈ ಪುಸ್ತಕದಲ್ಲಿ ಬರೆದ
ಎಲ್ಲಾ ಶಾಪಗಳಿಂದ ಬಾಧಿಸಿ ನಾಶಪಡಿಸುವನು. ಈ
ಬೋಧನಾ ಪುಸ್ತಕದಲ್ಲಿ ಬರೆದಿರುವ ಒಡಂಬಡಿಕೆಗೆ ಅದು
ಸೇರಿರುತ್ತದೆ.

[22]''ಮುಂದಿನ ದಿವಸಗಳಲ್ಲಿ ನಿಮ್ಮ ಸಂತತಿಯವರೂ
ದೂರದೇಶದ ಪರದೇಶಸ್ಥರೂ ನಿಮ್ಮ ದೇಶವು ಹೇಗೆ
ಹಾಳಾಗಿಹೋಯಿತು ಎಂಬುದನ್ನು ನೋಡುವರು.
ಯೆಹೋವನು ದೇಶಕ್ಕೆ ತಂದ ವ್ಯಾಧಿಗಳನ್ನು ಅವರು
ನೋಡುವರು. [23]ನಿಮ್ಮ ದೇಶವೆಲ್ಲಾ ನಿಷ್ಪ್ರಯೋಜಕವಾಗಿ
ರುವುದು. ಅದರ ಮೇಲೆ ಉಪ್ಪು, ಗಂಧಕವೂ ತುಂಬಿರು
ವುದು. ಅದರ ಮೇಲೆ ಯಾವ ಸಸಿಯೂ ಬೆಳೆಯ
ಲಾರದು; ಕೂಳೆಯೂ ಬೆಳೆಯುವುದಿಲ್ಲ. ಸೊದೋಮ್,
ಗೊಮೋರ, ಆದ್ಮಾ ಮತ್ತು ಚೆಬೋಯೀಮ್ ಎಂಬ
ಪಟ್ಟಣಗಳು ಯೆಹೋವನ ಕೋಪದ ನಿಮಿತ್ತ ನಾಶ
ವಾದಂತೆ ನಿಮ್ಮ ದೇಶವೂ ನಾಶವಾಗುವುದು.

[24]''ಇತರ ದೇಶಗಳವರು, 'ದೇವರು ಈ ದೇಶವನ್ನು
ಯಾಕೆ ನಾಶಮಾಡಿದನು? ಆತನು ಯಾಕೆ ಕೋಪ
ಗೊಂಡನು? ಎಂದು ವಿಚಾರಿಸುವರು. [25]ಯಾಕಂದರೆ
ಇಸ್ರೇಲರು ತಮ್ಮ ಪೂರ್ವಿಕರ ದೇವರಾದ ಯೆಹೋವ
ನೊಂದಿಗೆ ಮಾಡಿದ ಒಡಂಬಡಿಕೆಯನ್ನು ಬಿಟ್ಟು ತೊಲ
ಗಿದರು. ಅವರನ್ನು ಈಜಿಪ್ಟಿನಿಂದ ಹೊರತರುವಾಗ
ಯೆಹೋವನೊಂದಿಗೆ ಮಾಡಿದ ಒಡಂಬಡಿಕೆಯನ್ನು
ಅನುಸರಿಸಲಿಲ್ಲ.' [26]ಇಸ್ರೇಲ್ ಜನರು ಅನ್ಯ ದೇವರು
ಗಳನ್ನು ಪೂಜಿಸಲು ಪ್ರಾರಂಭಿಸಿದರು. ಅಂಥಾ ದೇವರು
ಗಳನ್ನು ಅವರು ಹಿಂದೆಂದೂ ಪೂಜಿಸಿರಲಿಲ್ಲ.
ಯೆಹೋವನು ಅನ್ಯದೇವತೆಗಳನ್ನು ಪೂಜಿಸಬಾರದು
ಎಂದು ಆಜ್ಞಾಪಿಸಿದ್ದರೂ ಅವರು ಅದನ್ನು ಉಲ್ಲಂಘಿ
ಸಿದರು. [27]ಈ ಕಾರಣಕ್ಕಾಗಿಯೇ ದೇವರು ಅವರ ಮೇಲೆ
ಸಿಟ್ಟುಗೊಂಡು ಈ ಪುಸ್ತಕದಲ್ಲಿ ಬರೆದಿರುವ ಶಾಪವನ್ನು
ಅವರಿಗೆ ಬರಮಾಡಿದನು. [28]ದೇವರು ಅವರ ಮೇಲೆ
ಬಹಳವಾಗಿ ಸಿಟ್ಟುಗೊಂಡದ್ದರಿಂದ ಅವರ ದೇಶದಿಂದ
ಅವರನ್ನು ಕಿತ್ತು ಅವರು ಈಗ ವಾಸಿಸುವ ಮತ್ತೊಂದು
ದೇಶದಲ್ಲಿ ಅವರನ್ನಿರಿಸಿದನು.'

[29]''ಯೆಹೋವನು ಕೆಲವು ಸಂಗತಿಗಳನ್ನು ಗುಪ್ತವಾಗಿ
ಟ್ಟಿದ್ದಾನೆ. ಅದು ಆತನಿಗೆ ಮಾತ್ರ ತಿಳಿದದೆ. ಆದರೆ
ಪ್ರಕಟಿಸಲ್ಪಟ್ಟಿರುವ ಸಂಗತಿಗಳನ್ನು ನಾವು ಮತ್ತು ನಮ್ಮ
ಸಂತತಿಗಳವರು ಮಾತ್ರ ತಿಳಿದಿದ್ದೇವೆ ಆ ಬೋಧನೆಗೆ
ನಾವು ನಿತ್ಯಕಾಲಕ್ಕೂ ವಿಧೇಯರಾಗುವಂತೆ ಹೇಳಿದ್ದಾನೆ.
ಆತನಿಗೆ ವಿಧೇಯರಾಗುವುದು ನಮ್ಮ ಕರ್ತವ್ಯ.

## ಇಸ್ರೇಲರು ತಮ್ಮ ಸ್ವದೇಶಕ್ಕೆ ಹಿಂದಿರುಗುವರು

30 ''ನಾನು ಈಗ ಹೇಳಿದ್ದೆಲ್ಲವೂ ನಿಮಗೆ ಸಂಭವಿಸು
ವುದು. ಆಶೀರ್ವಾದದ ಮೂಲಕ ನಿಮಗೆ ಶುಭ
ವಾಗುವದು; ಶಾಪದಿಂದ ನಿಮಗೆ ಅಶುಭವಾಗುವುದು.
ನಮ್ಮ ದೇವರಾದ ಯೆಹೋವನು ಇತರ ದೇಶಗಳಿಗೆ
ನಿಮ್ಮನ್ನು ಕಳುಹಿಸಿಬಿಡುವನು. ಆಗ ನೀವು ಇವುಗಳನ್ನೆಲ್ಲಾ
ನೆನಸುವಿರಿ. [2]ನೀವೂ ನಿಮ್ಮ ಸಂತತಿಯವರೂ
ಯೆಹೋವನ ಬಳಿಗೆ ಬರುವಿರಿ. ನಿಮ್ಮ ಹೃದಯ
ಪೂರ್ವಕವಾಗಿ ಆತನನ್ನು ಹಿಂಬಾಲಿಸುವಿರಿ. ಮತ್ತು ಆಜ್ಞೆ
ಗಳಿಗೆ ಸಂಪೂರ್ಣವಾಗಿ ವಿಧೇಯರಾಗುವಿರಿ. [3]ಆಗ ದೇವ
ರಾದ ಯೆಹೋವನು ನಿಮ್ಮ ಮೇಲೆ ದಯೆ ತೋರಿ
ಸುವನು. ನಿಮ್ಮನ್ನು ಸ್ವತಂತ್ರರನ್ನಾಗಿ ಮಾಡಿ ಎಲ್ಲಿ ಚದರಿಸ
ಲ್ಪಟ್ಟಿದ್ದೀರೋ ಅಲ್ಲಿಂದ ತಿರುಗಿ ಹಿಂದಕ್ಕೆ ತರುವನು.
[4]ಲೋಕದ ಕಟ್ಟಕಡೆಯ ಸ್ಥಳಕ್ಕೆ ನೀವು ಚದರಿಹೋದರೂ
ಅಲ್ಲಿಂದ ನಿಮ್ಮನ್ನು ಹಿಂದಕ್ಕೆ ತರುವನು. [5]ನಿಮ್ಮ ಪೂರ್ವಿ
ಕರು ವಾಸಿಸಿದ ಸ್ಥಳಕ್ಕೆ ನಿಮ್ಮನ್ನು ಮತ್ತೆ ಬರಮಾಡುವನು.
ಆ ದೇಶವು ನಿಮ್ಮದಾಗುವುದು. ಯೆಹೋವನು ನಿಮಗೆ
ಒಳ್ಳೆಯದನ್ನು ಮಾಡುವನು. ನಿಮ್ಮ ಪೂರ್ವಿಕರಿಗಿಂತಲೂ

---

**ಆದರೆ ... ತಿಳಿದಿದ್ದೇವೆ** ಇದು ಈ ಅರ್ಥವನ್ನೂ ಕೊಡಬಲ್ಲದು: ''ನಾವು ಕಂಡಿರುವ ಹಿಂದಿನ ಸಂಗತಿಗಳನ್ನು ಮತ್ತು ಈಗ ಸಂಭವಿಸುತ್ತಿರುವ ಸಂಗತಿಗಳನ್ನು ಮಾತ್ರ ನಾವು ತಿಳಿದಿದ್ದೇವೆ.''

ಅಧಿಕವಾಗಿ ನಿಮ್ಮನ್ನು ಅಭಿವೃದ್ಧಿಪಡಿಸುವನು. 6ನೀವು ಮತ್ತು ನಿಮ್ಮ ಸಂತತಿಯವರು ತನಗೆ ವಿಧೇಯರಾಗುವಂತೆ ನಮ್ಮ ದೇವರಾದ ಯೆಹೋವನು ಮಾಡುತ್ತಾನೆ. ಆಗ ನೀವು ಯೆಹೋವನನ್ನು ನಿಮ್ಮ ಪೂರ್ಣಹೃದಯದಿಂದ ಪ್ರೀತಿಸುವಿರಿ ಮತ್ತು ಜೀವಿಸುವಿರಿ.

7‘‘ನಿಮ್ಮ ದೇವರಾದ ಯೆಹೋವನು ಕೆಟ್ಟಸಂಗತಿಗಳೆಲ್ಲಾ ನಿಮ್ಮ ವೈರಿಗಳಿಗೆ ಆಗುವಂತೆ ಮಾಡುವನು. ಯಾಕಂದರೆ ಅವರು ನಿಮ್ಮನ್ನು ದ್ವೇಷಿಸಿ ತೊಂದರೆ ಕೊಡುತ್ತಿರುವರು. 8ನೀವು ಮತ್ತೆ ಯೆಹೋವನಿಗೆ ವಿಧೇಯರಾಗುವಿರಿ. ಇಂದು ನಾನು ನಿಮಗೆ ಕೊಡುವ ಎಲ್ಲಾ ಆಜ್ಞೆಗಳಿಗೆ ನೀವು ವಿಧೇಯರಾಗುವಿರಿ. 9ನಿಮ್ಮ ಎಲ್ಲಾ ಕಾರ್ಯಗಳಲ್ಲಿ ಯಶಸ್ವಿಯಾಗುವಂತೆ ದೇವರು ಮಾಡುವನು. ನಿಮಗೆ ಅನೇಕ ಮಕ್ಕಳನ್ನು ಅನುಗ್ರಹಿಸುವನು. ನಿಮ್ಮ ದನಗಳನ್ನು ಆಶೀರ್ವದಿಸುವನು. ಅವುಗಳಿಗೆ ಅನೇಕ ಕರುಗಳಿರುವವು. ನಿಮ್ಮ ಹೊಲಗಳು ಅಧಿಕವಾದ ಬೆಳೆಯನ್ನು ಕೊಡುವಂತೆ ಆಶೀರ್ವದಿಸುವನು. ಯೆಹೋವನು ನಿಮಗೆ ಶುಭವನ್ನು ಉಂಟು ಮಾಡುವುದರಲ್ಲಿ ಸಂತೋಷಿಸುವನು. ನಿಮ್ಮ ಪೂರ್ವಿಕರಿಗೆ ಮೇಲನ್ನು ಉಂಟುಮಾಡಲು ಆತನು ಬಯಸಿದ್ದನು. 10ಅತನು ಹೇಳಿದಂತೆ ನೀವು ನಡೆದುಕೊಳ್ಳಬೇಕು. ಈ ಧರ್ಮೋಪದೇಶ ಪುಸ್ತಕದಲ್ಲಿ ಬರೆದಿರುವ ಬೋಧನೆಗಳನ್ನು ನೀವು ಅನುಸರಿಸಬೇಕು. ನಿಮ್ಮ ಪೂರ್ಣಪ್ರಾಣದಿಂದಲೂ ಆತ್ಮದಿಂದಲೂ ನಿಮ್ಮ ದೇವರಾದ ಯೆಹೋವನನ್ನು ಆರಾಧಿಸಬೇಕು; ಆಗ ನಿಮಗೆ ಈ ಎಲ್ಲಾ ಒಳ್ಳೆಯ ಸಂಗತಿಗಳು ಸಂಭವಿಸುತ್ತವೆ.

## ಜೀವವೋ ಮರಣವೋ

11‘‘ನಾನು ಈ ದಿನ ಕೊಡುವ ಆಜ್ಞೆಯು ಅಂಥ ಕಷ್ಟದ್ದೇನೂ ಅಲ್ಲ; ಅದು ದೂರವಾದದ್ದೂ ಅಲ್ಲ. 12ಈ ಆಜ್ಞೆಯು ಆಕಾಶದೊಳಗೆ ಇಲ್ಲ, ‘ನಮಗೋಸ್ಕರ ಮೇಲಿನ ಲೋಕವನ್ನೇರಿ ಅದನ್ನು ತಿಳಿದುಕೊಂಡು ಬಂದು ನಮಗೆ ತಿಳಿಯಪಡಿಸುವವನು ಯಾರು? ನಾವು ಅದನ್ನು ಕೇಳಿ ಅದರಂತೆಯೇ ಮಾಡುತ್ತಿದ್ದೆವು’ ಎಂದು ವಿಚಾರಿಸುವ ಅವಶ್ಯವಿಲ್ಲ. 13ಇದು ಸಮುದ್ರದ ಆಚೆ ಇರುವ ಮಾತಲ್ಲ, ‘ನಮಗೋಸ್ಕರ ಸಮುದ್ರವನ್ನು ದಾಟಿ ಅದನ್ನು ತೆಗೆದುಕೊಂಡು ಬಂದು ನಮಗೆ ತಿಳಿಸುವವರು ಯಾರಿರುವರು?’ ನಾವದನ್ನು ಕೇಳಿ ಅದರಂತೆ ನಡೆಯಬಹುದಾಗಿತ್ತು ಎಂದು ಹೇಳುವ ಅವಶ್ಯಕತೆ ಇಲ್ಲ. 14ದೇವರ ನುಡಿಯು ನಿಮ್ಮ ಬಳಿಯಲ್ಲಿಯೇ ಇದೆ. ಅದು ನಿಮ್ಮ ಬಾಯಿಯಲ್ಲಿಯೂ ಹೃದಯದಲ್ಲಿಯೂ ಇದೆ. ಆದುದರಿಂದ ಅವುಗಳಿಗೆ ಕಷ್ಟವಿಲ್ಲದೆ ವಿಧೇಯರಾಗಬಹುದು.

15‘‘ಈ ದಿನ ನೀವು ಜೀವ ಮತ್ತು ಮರಣ; ಶುಭ ಮತ್ತು ಅಶುಭ ಇವುಗಳನ್ನು ಆಯ್ಕೆಮಾಡಿಕೊಳ್ಳಲು ನಿಮಗೆ ಅವಕಾಶ ಮಾಡಿಕೊಟ್ಟಿದ್ದೇನೆ. 16ನಿಮ್ಮ ದೇವರಾದ ಯೆಹೋವನನ್ನು ನೀವು ಸಂಪೂರ್ಣವಾಗಿ ಪ್ರೀತಿಸಬೇಕೆಂದು ಆಜ್ಞಾಪಿಸುತ್ತೇನೆ. ಆತನ ಆಜ್ಞೆಗಳಿಗೆ, ನಿಯಮಗಳಿಗೆ ಮತ್ತು ವಿಧಿಗಳಿಗೆ ವಿಧೇಯರಾಗಬೇಕೆಂದು ನಾನು ನಿಮಗೆ ಆಜ್ಞಾಪಿಸುತ್ತೇನೆ. ಆಗ ನೀವು ಬದುಕುವಿರಿ ಮತ್ತು ನಿಮ್ಮ ಜನಾಂಗ ದೊಡ್ಡದಾಗಿ ಬೆಳೆಯುವುದು. ನಿಮಗಾಗಿ ತೆಗೆದುಕೊಳ್ಳಲು ಪ್ರವೇಶಿಸಲಿರುವ ದೇಶದಲ್ಲಿ ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಆಶೀರ್ವದಿಸುವನು. 17ಆದರೆ ನೀವು ಯೆಹೋವನಿಗೆ ವಿಮುಖರಾಗಿ ಆತನಿಗೆ ಕಿವಿಗೊಡದೆ ಹೋದರೆ, ಬೇರೆ ದೇವರುಗಳನ್ನು ಆರಾಧಿಸಲು ಮತ್ತು ಸೇವೆ ಮಾಡಲು ಹೋದರೆ, 18ನೀವು ನಾಶವಾಗುವಿರಿ. ನಿಮ್ಮನ್ನು ನಾನು ಎಚ್ಚರಿಸುತ್ತಿದ್ದೇನೆ. ನೀವು ಯೆಹೋವನಿಗೆ ವಿಮುಖರಾದರೆ, ನಿಮಗಾಗಿ ತೆಗೆದುಕೊಳ್ಳಲು ನೀವು ಪ್ರವೇಶಿಸುತ್ತಿರುವ ಜೋರ್ಡನ್ ನದಿಯ ಆಚೆ ದಡದಲ್ಲಿರುವ ದೇಶದಲ್ಲಿ ನೀವು ಬಹುಕಾಲದವರೆಗೆ ಜೀವಿಸುವುದಿಲ್ಲ.

19‘‘ಈ ದಿನ ಎರಡು ಮಾರ್ಗಗಳಲ್ಲಿ ಯಾವುದನ್ನು ಬೇಕಾದರೂ ಆರಿಸಿಕೊಳ್ಳಲು ನಾನು ನಿಮಗೆ ಅವಕಾಶ ಕೊಟ್ಟಿದ್ದೇನೆ. ಪರಲೋಕವೂ ಭೂಮಿಯೂ ಅದಕ್ಕೆ ಸಾಕ್ಷಿ. ನೀವು ಜೀವವನ್ನಾಗಲೀ, ಮರಣವನ್ನಾಗಲೀ ಆರಿಸಿಕೊಳ್ಳಬಹುದು. ಜೀವವನ್ನಾರಿಸಿಕೊಂಡರೆ, ಆಶೀರ್ವಾದವು ಸಿಗುವುದು. ಮರಣವು ನಿಮಗೆ ಶಾಪವನ್ನು ತರುವುದು. ಆದುದರಿಂದ ಜೀವವನ್ನು ಆರಿಸಿಕೊಳ್ಳಿರಿ ನೀವೂ ನಿಮ್ಮ ಮಕ್ಕಳೂ ಬಾಳುವಿರಿ. 20ನೀವು ನಿಮ್ಮ ದೇವರಾದ ಯೆಹೋವನನ್ನು ಪ್ರೀತಿಸಿ ಆತನಿಗೆ ವಿಧೇಯರಾಗಬೇಕು. ಯೆಹೋವನು ನಿಮ್ಮ ಜೀವವಾಗಿದ್ದಾನೆ. ನಿಮಗೆ ದೀರ್ಘವಾದ ಆಯುಷ್ಯನ್ನು ನಿಮ್ಮ ಪೂರ್ವಿಕರಾದ ಅಬ್ರಹಾಮನಿಗೆ, ಇಸಾಕನಿಗೆ, ಯಾಕೋಬನಿಗೆ ಕೊಡುವುದಾಗಿ ವಾಗ್ದಾನ ಮಾಡಿದ್ದ ದೇಶದಲ್ಲಿ ನಿಮಗೆ ಅನುಗ್ರಹಿಸುತ್ತಾನೆ.’’

## ಯೆಹೋಶುವನು ನಿಮ್ಮ ಹೊಸ ನಾಯಕನಾಗಿದ್ದಾನೆ

31 ಮೋಶೆಯು ಇಸ್ರೇಲರ ಸಮೂಹಕ್ಕೆ ಹೇಳಿದ್ದೇನೆಂದರೆ, 2‘‘ನಾನು ಈಗ ನೂರಿಪ್ಪತ್ತು ವರ್ಷದವನಾಗಿದ್ದೇನೆ. ನನಗೆ ನಿಮ್ಮನ್ನು ಇನ್ನೂ ನಡೆಸಲು ಸಾಧ್ಯವಿಲ್ಲ. ಯೆಹೋವನು, ‘ನೀನು ಜೋರ್ಡನ್ ಹೊಳೆಯನ್ನು ದಾಟಕೂಡದು’ ಎಂದು ಹೇಳಿರುತ್ತಾನೆ. 3ಆದರೆ ನಿಮ್ಮನ್ನು ಯೆಹೋವನೇ, ಆಚೆ ಕಡೆಗೆ ನಡೆಸುವನು. ಆ ದೇಶದ ಜನರನ್ನು ಯೆಹೋವನು ನಾಶಮಾಡುವನು. ಅವರ ಕೈಯಿಂದ ನೀವು ಆ ದೇಶವನ್ನು ವಶಪಡಿಸಿ

ಕೊಳ್ಳುವಿರಿ. ಯೆಹೋಶುವನು ನಿಮ್ಮನ್ನು ಇನ್ನು ಮುಂದೆ
ನಡಿಸುವನು ಎಂದು ಯೆಹೋವನು ಹೇಳಿದ್ದಾನೆ.
4‘‘ಯೆಹೋವನು ಸೀಹೋನನನ್ನು ಮತ್ತು ಓಗನನ್ನು
ನಾಶಮಾಡಿದನು. ಅಮೋರಿಯ ಅರಸರನ್ನು ನಾಶ
ಮಾಡಿದನು; ಅದೇ ರೀತಿಯಾಗಿ ನೀವು ಹೋಗುವ ದೇಶ
ದಲ್ಲಿಯೂ ಮಾಡುವನು. 5ಯೆಹೋವನು ಆ ಜನಾಂಗ
ಗಳನ್ನು ಸೋಲಿಸಲು ಸಹಾಯ ಮಾಡುವನು. ಆದರೆ
ನಾನು ಹೇಳಿದ ಪ್ರಕಾರ ನೀವು ಅವರಿಗೆ ಮಾಡಬೇಕು.
6ಧೈರ್ಯವಾಗಿರಿ ಶಕ್ತಿಹೊಂದಿದವರಾಗಿರಿ, ಆ ಜನರಿಗೆ
ಹೆದರಬೇಡಿರಿ. ಯಾಕಂದರೆ ದೇವರಾದ ಯೆಹೋವನು
ನಿಮ್ಮ ಸಂಗಡ ಇರುವನು. ಆತನು ನಿಮ್ಮ ಕೈಬಿಡುವುದಿಲ್ಲ,
ನಿಮ್ಮನ್ನು ತೊರೆಯುವುದಿಲ್ಲ.’’
7ಆಮೇಲೆ ಮೋಶೆಯು ಯೆಹೋಶುವನನ್ನು ಕರೆದು
ಎಲ್ಲಾ ಇಸ್ರೇಲರ ಎದುರಿನಲ್ಲಿ, ‘‘ಶಕ್ತಿಶಾಲಿಯಾಗಿದ್ದು
ಧೈರ್ಯಗೊಂಡಿರು. ನೀನು ಈ ಜನರನ್ನು ಯೆಹೋವನು
ನಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿದಂಥ ದೇಶಕ್ಕೆ
ನಡೆಸು. ಆ ದೇಶವನ್ನು ಸ್ವಾಧೀನ ಮಾಡಿಕೊಳ್ಳಲು
ಇಸ್ರೇಲರಿಗೆ ಸಹಾಯಮಾಡು. 8ಯೆಹೋವನು ನಿನ್ನನ್ನು
ನಡೆಸುತ್ತಾನೆ, ಆತನು ತಾನೇ ನಿನ್ನೊಂದಿಗಿರುವನು.
ಆತನು ನಿನ್ನ ಕೈಬಿಡುವುದಿಲ್ಲ, ನಿನ್ನನ್ನು ತೊರೆಯುವುದಿಲ್ಲ.
ಆದುದರಿಂದ ಚಿಂತಿಸಬೇಡ, ಭಯಪಡಬೇಡ’’ಎಂದು
ಹೇಳಿದನು.

## ಮೋಶೆಯು ಬೋಧನೆಗಳನ್ನೆಲ್ಲಾ ಬರೆದದ್ದು

9ಆಮೇಲೆ ಮೋಶೆಯು ಬೋಧನೆಗಳನ್ನೆಲ್ಲಾ ಬರೆದು
ಯಾಜಕರ ಕೈಯಲ್ಲಿ ಅದನ್ನು ಕೊಟ್ಟನು. ಯಾಜಕರು
ಲೇವಿಯ ಕುಲದವರು. ಅವರ ಕರ್ತವ್ಯ ಏನಾಗಿತ್ತೆಂದರೆ
ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು ಹೊರು
ವುದು. ಮೋಶೆಯು ಇಸ್ರೇಲರ ಎಲ್ಲಾ ಹಿರಿಯರಿಗೂ
ಬೋಧನೆಯ ಪುಸ್ತಕವನ್ನು ಕೊಟ್ಟನು. 10ಆಮೇಲೆ
ಮೋಶೆಯು ನಾಯಕರೊಂದಿಗೆ ಮಾತನಾಡುತ್ತಾ,
‘‘ಪ್ರತೀ ಏಳನೆಯ ವರ್ಷದ ಕೊನೆಯಲ್ಲಿ ಅಂದರೆ ಬಿಡು
ಗಡೆಯ ವರ್ಷದಲ್ಲಿ ನಡೆಯುವ ಪರ್ಣಶಾಲೆಗಳ ಹಬ್ಬದ
ಸಮಯದಲ್ಲಿ ಈ ಬೋಧನಾ ಪುಸ್ತಕವನ್ನು ಓದಬೇಕು.
11ಆ ಹಬ್ಬದ ಸಮಯದಲ್ಲಿ ಇಸ್ರೇಲರೆಲ್ಲರು ತಮ್ಮ ದೇವ
ರಾದ ಯೆಹೋವನು ಆರಿಸುವ ವಿಶೇಷ ಸ್ಥಳದಲ್ಲಿ ಕೂಡಿ
ಬರುವಾಗ ಈ ಬೋಧನೆಯ ಪುಸ್ತಕವನ್ನು ಎಲ್ಲರಿಗೂ
ಕೇಳಿಸುವಂತೆ ಓದಬೇಕು. 12ಎಲ್ಲರನ್ನು ಅಂದರೆ ಗಂಡಸ
ರನ್ನೂ ಹೆಂಗಸರನ್ನೂ ಚಿಕ್ಕಮಕ್ಕಳನ್ನೂ ಮತ್ತು ನಿಮ್ಮ
ನಿಮ್ಮ ಊರಿನಲ್ಲಿ ವಾಸಿಸುವ ಪರದೇಶಸ್ಥರನ್ನೂ ಒಟ್ಟಾಗಿ
ಸೇರಿಸಬೇಕು. ಅವರು ಬೋಧನೆಯನ್ನು ಕೇಳಿ ತಮ್ಮ
ದೇವರಾದ ಯೆಹೋವನನ್ನು ಸನ್ಮಾನಿಸಲು ಕಲಿಯು
ವರು ಮತ್ತು ಬೋಧನೆಯಲ್ಲಿ ತಿಳಿಸಿರುವ ಪ್ರಕಾರ
ಮಾಡುವರು. 13ಅವರ ಸಂತತಿಯವರಿಗೆ ಯೆಹೋವನ
ಕಟ್ಟಳೆಯ ಬಗ್ಗೆ ಗೊತ್ತಿಲ್ಲದಿದ್ದರೆ ಅವರು ಬೋಧನಾ
ಪುಸ್ತಕ ಓದುವಾಗ ತಿಳಿದುಕೊಳ್ಳುವರು. ನಿಮ್ಮ ದೇವರಾದ
ಯೆಹೋವನನ್ನು ಗೌರವಿಸಲು ಅವರು ಅದರಿಂದ ಕಲಿತು
ಕೊಳ್ಳುವರು; ನೀವು ಜೋರ್ಡನ್ ನದಿ ದಾಟಿಹೋಗಿ
ವಶಪಡಿಸಿಕೊಳ್ಳಲಿರುವ ದೇಶದಲ್ಲಿ ನೀವು ವಾಸ
ವಾಗಿರುವ ತನಕ ಅವರು ಗೌರವಿಸುವರು.’’

## ದೇವರು ಯೆಹೋಶುವನನ್ನೂ ಮೋಶೆಯನ್ನೂ ಒಟ್ಟಿಗೆ ಕರೆದದ್ದು

14ಯೆಹೋವನು ಮೋಶೆಗೆ, ‘‘ನೀನು ಸಾಯುವ ಸಮ
ಯವು ಹತ್ತಿರವಾಗುತ್ತಾ ಬಂತು. ಯೆಹೋಶುವನನ್ನು
ದೇವದರ್ಶನಗುಡಾರಕ್ಕೆ ಕರೆದುಕೊಂಡು ಬಾ. ಅವನು
ಮಾಡಬೇಕಾದ ವಿಷಯಗಳನ್ನು ನಾನು ಯೆಹೋಶುವ
ನಿಗೆ ತಿಳಿಸುವೆನು’’ ಎಂದು ಹೇಳಿದನು. ಮೋಶೆಯೂ
ಯೆಹೋಶುವನು ದೇವದರ್ಶನ ಗುಡಾರದೊಳಗೆ
ಹೋದರು.
15ಯೆಹೋವನು ಒಂದು ಮೇಘಸ್ತಂಭದಲ್ಲಿ ಪ್ರತ್ಯಕ್ಷ
ನಾದನು. ಆ ಮೋಡವು ಗುಡಾರದ ಬಾಗಿಲಲ್ಲಿ ಬಂದು
ನಿಂತಿತು. 16ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
‘‘ನೀನು ಬೇಗನೆ ಸಾಯುವೆ. ನಿನ್ನ ಪೂರ್ವಿಕರ ಬಳಿಗೆ
ನೀನು ಸೇರಿದಾಗ ಈ ಜನರು ನನಗೆ ನಂಬಿಗಸ್ತ
ರಾಗಿರುವುದಿಲ್ಲ. ನಾನು ಅವರೊಡನೆ ಮಾಡಿರುವ ಒಡಂ
ಬಡಿಕೆಯನ್ನು ಅವರು ಮುರಿಯುವರು. ಅವರು ನನ್ನನ್ನು
ತೊರೆದು ತಾವು ಸ್ವಾಧೀನಮಾಡಿಕೊಳ್ಳುವ ದೇಶದ ಅನ್ಯ
ದೇವತೆಗಳನ್ನು ಪೂಜಿಸುವರು. 17ಆಗ ನಾನು ಅವರ
ಮೇಲೆ ತುಂಬಾ ಕೋಪವುಳ್ಳವನಾಗಿರುವೆನು. ಅವರಿಗೆ
ಸಹಾಯಮಾಡದೆ ಅವರನ್ನು ಬಿಟ್ಟುಬಿಡುವೆನು; ಅವರು
ನಾಶವಾಗುವರು; ಅವರಿಗೆ ಭಯಂಕರ ಸಂಗತಿಗಳು ಸಂಭ
ವಿಸುವವು; ಅನೇಕ ಕೇಡುಗಳಾಗುವುವು; ಆಗ, ‘ನಮ್ಮ
ದೇವರು ನಮ್ಮ ಮಧ್ಯದಲ್ಲಿ ಇಲ್ಲದಿರುವ ಕಾರಣ ಇವೆಲ್ಲಾ
ನಮಗೆ ಸಂಭವಿಸುತ್ತವೆ’ ಎಂದು ಅವರು ಹೇಳುವರು.
18ಆಗಲೂ ನಾನು ಅವರಿಗೆ ಸಹಾಯಮಾಡುವುದಿಲ್ಲ.
ಅವರು ಕೆಟ್ಟಕಾರ್ಯಗಳನ್ನು ಮಾಡಿ ಅನ್ಯದೇವರುಗಳನ್ನು
ಅವಲಂಭಿಸಿದ್ದಾರಲ್ಲಾ!
19‘‘ಆದುದರಿಂದ ನೀನು ಈ ಹಾಡನ್ನು ಬರೆ, ಇಸ್ರೇಲ
ರಿಗೆ ಇದನ್ನು ಕಲಿಸು. ಈ ಹಾಡನ್ನು ಹಾಡಲು ಅವರಿಗೆ
ಕಲಿಸು. ಆಗ ಇದು ಇಸ್ರೇಲ್ ಜನರ ವಿರುದ್ಧವಾಗಿ ಸಾಕ್ಷಿ
ಯಾಗುವುದು. 20ನಾನು ಅವರ ಪೂರ್ವಿಕರಿಗೆ ವಾಗ್ದಾನ
ಮಾಡಿದ ದೇಶಕ್ಕೆ ಅವರನ್ನು ಕರೆದುಕೊಂಡು ಹೋಗು
ವೆನು. ಆ ದೇಶವು ಹಾಲು ಜೇನು ಹರಿಯುವ

ದೇಶವಾಗಿರುತ್ತದೆ. ಅವರಿಗೆ ಇಷ್ಟ ಬಂದದ್ದನ್ನೆಲ್ಲಾ ತಿನ್ನಲು
ಅವರಿಗೆ ಸಿಗುವುದು. ಅವರಿಗೆ ಸಮೃದ್ಧಿಯಾದ ಜೀವಿತವು
ಇರುವುದು. ಆದರೆ ಅವರು ಸುಳ್ಳುದೇವರ ಕಡೆಗೆ ತಿರುಗಿ
ಅವುಗಳನ್ನು ಪೂಜಿಸುವರು. ಅವರು ನನ್ನಿಂದ ತೊಲಗಿ
ನನ್ನ ಒಡಂಬಡಿಕೆಯನ್ನು ಮುರಿದುಬಿಡುವರು. [21]ಆಗ
ಭಯಂಕರವಾದ ಸಂಗತಿಗಳು ಅವರಿಗೆ ಉಂಟಾಗುವವು.
ಅವರಿಗೆ ಅನೇಕ ಸಂಕಟಗಳು ಉಂಟಾಗುವವು. ಆಗ ಆ
ಜನರಿಗೆ ಈ ಹಾಡು ತಿಳಿದಿರುವುದರಿಂದ ತಾವು ಎಷ್ಟು
ತಪ್ಪಿತಸ್ಥರು ಎಂದು ತಿಳಿಯುವುದು. ನಾನು ಕೊಡುವು
ದಾಗಿ ವಾಗ್ದಾನ ಮಾಡಿರುವ ದೇಶಕ್ಕೆ ಅವರನ್ನು ಇನ್ನೂ
ಕರೆದುಕೊಂಡು ಹೋಗಿಲ್ಲ. ಆದರೆ ಅವರು ಅಲ್ಲಿ ಏನು
ಮಾಡುತ್ತಾರೆಂಬುದು ನನಗೆ ಆಗಲೇ ಗೊತ್ತಿದೆ''
[22]ಅದೇ ದಿವಸದಲ್ಲಿ ಮೋಶೆಯು ಹಾಡನ್ನು ಬರೆ
ದಿಟ್ಟನು. ಇಸ್ರೇಲ್ ಜನರಿಗೆ ಆ ಹಾಡನ್ನು ಕಲಿಸ
ಲಾಯಿತು.
[23]ನೂನನ ಮಗನಾದ ಯೆಹೋಶುವನೊಂದಿಗೆ
ಯೆಹೋವನು ಮಾತನಾಡಿ ಹೇಳಿದ್ದೇನೆಂದರೆ, ''ಧೈರ್ಯ
ವಂತನಾಗಿದ್ದು ಬಲಗೊಳ್ಳು, ನೀನು ಜನರನ್ನು ವಾಗ್ದಾನದ
ದೇಶಕ್ಕೆ ನಡೆಸಬೇಕು. ನಾನು ನಿನ್ನೊಂದಿಗಿರುವೆನು. ''

### ಮೋಶೆ ಇಸ್ರೇಲರನ್ನು ಎಚ್ಚರಿಸಿದ್ದು

[24]ಯೆಹೋವನ ಕಟ್ಟಳೆ ವಿಧಿನಿಯಮಗಳ ಬೋಧನೆ
ಯನ್ನೆಲ್ಲಾ ಮೋಶೆಯು ಪುಸ್ತಕದಲ್ಲಿ ಜಾಗ್ರತೆಯಾಗಿ ಬರೆ
ದಿಟ್ಟನು. [25]ಬಳಿಕ ಮೋಶೆಯು ಲೇವಿಯರಿಗೆ
[26](ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು
ಹೊತ್ತುಕೊಂಡಿದ್ದವರಿಗೆ), ''ಈ ಪುಸ್ತಕವನ್ನು ತೆಗೆದು
ಕೊಂಡು ದೇವದರ್ಶನಗುಡಾರದೊಳಗಿರುವ ಪೆಟ್ಟಿಗೆಯ
ಪಕ್ಕದಲ್ಲಿಡಿರಿ. ಅದು ನಿಮಗೆ ವಿರುದ್ಧವಾದ ಸಾಕ್ಷಿಯಾಗಿ
ರುವುದು. [27]ನೀವು ಹಠಮಾರಿಗಳೆಂದು ನಾನು ಬಲ್ಲೆನು.
ನಾನು ನಿಮ್ಮೊಂದಿಗೆ ಇದ್ದಾಗಲೇ ನೀವು ಯೆಹೋವನಿಗೆ
ವಿಧೇಯರಾಗಲಿಲ್ಲ. ಆದುದರಿಂದ ನಾನು ಸತ್ತ ಬಳಿಕ
ಆತನ ಮಾತುಗಳನ್ನು ನೀವು ಕೇಳುವುದಿಲ್ಲ ಎಂದು ನನಗೆ
ಚೆನ್ನಾಗಿ ಗೊತ್ತು. [28]ಎಲ್ಲಾ ಕುಲಾಧಿಪತಿಗಳವರನ್ನು ಮತ್ತು
ಗೋತ್ರ ಪ್ರಧಾನರನ್ನು ನನ್ನ ಬಳಿಗೆ ಕರೆದುತನ್ನಿರಿ; ಅವರಿಗೆ
ನಾನಿದನ್ನು ತಿಳಿಸುವೆನು. ನಾನು ಆಕಾಶವನ್ನೂ ಭೂಮಿ
ಯನ್ನೂ ಅದಕ್ಕೆ ಸಾಕ್ಷಿಯಾಗಿ ಮಾಡುವೆನು. [29]ನನ್ನ
ಮರಣದ ಬಳಿಕ ನೀವು ಕೆಟ್ಟಕಾರ್ಯಗಳನ್ನು ಮಾಡುವಿ
ರೆಂದು ನನಗೆ ಗೊತ್ತಿದೆ; ನನ್ನ ಅಪ್ಪಣೆಗಳನ್ನು ಮೀರುವಿರಿ.
ನಿಮಗೆ ಭಯಂಕರ ಸಂಗತಿಗಳು ಸಂಭವಿಸುವವು.
ಯಾಕಂದರೆ ಯೆಹೋವನನ್ನು ನೀವು ಸಿಟ್ಟಿಗೆಬ್ಬಿಸುವಿರಿ.''
ಎಂದು ಹೇಳಿದನು.

### ಮೋಶೆಯ ಹಾಡು

[30]ಇಸ್ರೇಲ್ ಸಮೂಹವು ಒಟ್ಟಾಗಿ ಸೇರಿದಾಗ
ಮೋಶೆಯು ಹೀಗೆ ಹಾಡಿದನು:

32 ''ಆಕಾಶವೇ, ನಾನು ಹೇಳುವದನ್ನು ಕೇಳು.
ಭೂಮಿಯೇ, ನನ್ನ ಬಾಯಿಯ ಮಾತು
ಗಳನ್ನು ಆಲಿಸು.
2 ನನ್ನ ಬೋಧನೆಯು ವೃಷ್ಟಿಯೋಪಾದಿಯಂತೆ
ಬರುವುದು. ನೆಲದ ಮೇಲೆ ಬೀಳುವ ಇಬ್ಬನಿ
ಯಂತಿರುವುದು; ಮೃದುವಾದ ಹುಲ್ಲಿನ ಮೇಲೆ
ಬೀಳುವ ಹದವಾದ ಮಳೆಯಂತಿರುವುದು;
ಹಸಿರು ಸಸಿಗಳ ಮೇಲೆ ಬೀಳುವ ಮಳೆಯ
ಹನಿಯಂತಿರುವುದು.
3 ಯೆಹೋವನ ಹೆಸರಿನಲ್ಲಿ ಮಾತಾಡುವಂತೆ
ಮಾಡಿದ ದೇವರಿಗೆ ಸ್ತೋತ್ರ!
4 ''ಯೆಹೋವನ (ಬಂಡೆಯ) ಕಾರ್ಯವು ನಿಷ್ಕಳಂಕ
ವಾದದ್ದು. ಯಾಕಂದರೆ ಆತನ ಮಾರ್ಗವೆಲ್ಲವೂ
ಸರಿಯಾದದ್ದೇ. ದೇವರು ಸತ್ಯವಂತನೂ ನಂಬಿ
ಗಸ್ತನೂ ಆಗಿದ್ದಾನೆ. ಆತನು ಒಳ್ಳೆಯವನೂ
ಪ್ರಮಾಣಿಕನೂ ಆಗಿದ್ದಾನೆ.
5 ನೀವು ಆತನ ಮಕ್ಕಳಲ್ಲ. ನಿಮ್ಮ ಪಾಪಗಳು
ಆತನನ್ನು ಮಲಿನಮಾಡುವವು. ನೀವು ಡೊಂಕಾದ
ಸುಳ್ಳುಗಾರರು.
6 ಹೀಗೆ ಆತನು ನಿಮಗೆ ಮಾಡಿದ ಒಳ್ಳೆಯದಕ್ಕೆ
ಉಪಕಾರ ತೋರಿಸುವಿರಾ? ಇಲ್ಲ, ನೀವು ಬುದ್ಧಿ
ಹೀನರಾಗಿದ್ದೀರಿ. ಯೆಹೋವನು ನಿಮ್ಮ ತಂದೆ
ಯಾಗಿದ್ದಾನೆ. ಆತನೇ ನಿಮ್ಮನ್ನು ನಿರ್ಮಿಸಿ
ದಾತನು. ಆತನೇ ನಿಮ್ಮನ್ನು ಉಂಟು ಮಾಡಿ
ದಾತನು. ಆತನೇ ಆಧಾರ ನೀಡುವಾತನು.

7 ''ಹಿಂದೆ ಏನಾಯಿತೆಂದು ಜ್ಞಾಪಕಕ್ಕೆ ತಂದುಕೊಳ್ಳಿರಿ.
ಬಹಳ ವರುಷಗಳ ಹಿಂದೆ ನಡೆದದ್ದನ್ನು ಜ್ಞಾಪಕ
ಮಾಡಿಕೊಳ್ಳಿರಿ. ನಿಮ್ಮ ತಂದೆಗಳನ್ನು ಕೇಳಿ, ಅವರು
ಹೇಳುವರು. ನಿಮ್ಮ ನಾಯಕರನ್ನು ವಿಚಾರಿಸಿ.
ಅವರು ಹೇಳುವರು.
8 ಪರಲೋಕದಲ್ಲಿರುವ ದೇವರು ಭೂಮಿಯ
ಮೇಲಿದ್ದ ಜನರನ್ನು ಪ್ರತ್ಯೇಕಿಸಿದನು. ಪ್ರತಿ
ಯೊಂದು ಜನಾಂಗಕ್ಕೆ ಅದರದೇ ಆದ ದೇಶವನ್ನು
ಕೊಟ್ಟನು. ಅದಕ್ಕೆ ಮೇರೆಯನ್ನು ಆತನು ಮಾಡಿ
ಕೊಟ್ಟನು. ಇಸ್ರೇಲರಲ್ಲಿ ಜನರೆಷ್ಟು ಮಂದಿ
ಇದ್ದಾರೋ ಅಷ್ಟು ಜನಾಂಗಗಳಿವೆ.
9 ಯೆಹೋವನ ಪಾಲು ಆತನ ಜನರೇ. ಇಸ್ರೇಲರು
ದೇವಜನರಾಗಿದ್ದಾರೆ.

10 ‘‘ಮರುಭೂಮಿಯಲ್ಲಿ ಯೆಹೋವನು ಇಸ್ರೇಲ
ನನ್ನು ಕಂಡನು. ಅದು ಬರಿದಾದ ಗಾಳಿ ಬೀಸು
ತ್ತಿದ್ದ ಸ್ಥಳವಾಗಿತ್ತು. ಯೆಹೋವನು ಅದನ್ನು
ಸುತ್ತುವರಿದು ಇಸ್ರೇಲನ್ನು ಸಂರಕ್ಷಿಸಿದನು; ತನ್ನ
ಕಣ್ಣುಗುಡ್ಡೆಯಂತೆ ಅವರನ್ನು ಕಾಪಾಡಿದನು.
11 ಇಸ್ರೇಲರಿಗೆ ಯೆಹೋವನು ಹದ್ದಿನಂತಿರು ವನು!
ಹದ್ದು ತನ್ನ ಮರಿಗಳಿಗೆ ಹಾರಲು ಕಲಿಸಲು ಗೂಡಿ
ನಿಂದ ಕೆಳಕ್ಕೆ ತಳ್ಳುವುದು. ಮರಿಗಳು ಕೆಳಗೆ ಬೀಳ
ದಂತೆ ಅವುಗಳ ಜೊತೆಯಲ್ಲಿ ಹಾರಾಡುವುದು.
ಅವುಗಳು ಬೀಳುವಾಗ ತನ್ನ ರಕ್ಕೆಯನ್ನು ಚಾಚಿ
ಬೀಳದಂತೆ ಮಾಡುವದು. ನಂತರ ಸುರಕ್ಷಿತ
ಸ್ಥಳಕ್ಕೆ ಕೊಂಡೊಯ್ಯುವುದು. ಯೆಹೋವನು
ಅದರಂತೆಯೇ.

12 ‘‘ಯೆಹೋವನೇ ಇಸ್ರೇಲನ್ನು ನಡೆಸಿದನು. ಅನ್ಯ
ದೇವರು ಯಾವ ಸಹಾಯವನ್ನೂ ಮಾಡಲಿಲ್ಲ.
13 ಬೆಟ್ಟಗುಡ್ಡಗಳ ಪ್ರಾಂತ್ಯವನ್ನು ವಶಪಡಿಸಲು
ಇಸ್ರೇಲನ್ನು ನಡೆಸಿದನು. ಹೊಲದ ಬೆಳೆಯನ್ನು
ಇಸ್ರೇಲು ಕೊಯಿಲು ಮಾಡಿದನು. ಬಂಡೆ
ಯಿಂದ ಜೇನನ್ನು ಯೆಹೋವನು ಇಸ್ರೇಲಿಗೆ
ಕೊಟ್ಟನು. ಗಟ್ಟಿಯಾದ ಬಂಡೆಯಿಂದ ಎಣ್ಣೆಯು
ಹೊರಡುವಂತೆ ಮಾಡಿದನು.
14 ಯೆಹೋವನು ಇಸ್ರೇಲಿಗೆ ಹಿಂಡಿನಿಂದ ಬೆಣ್ಣೆ
ಯನ್ನೂ ಹಾಲನ್ನೂ ಕೊಟ್ಟನು. ಆತನು ಕೊಬ್ಬಿದ
ಕುರಿ ಮರಿಗಳನ್ನೂ ಆಡುಗಳನ್ನೂ ಬಾಷಾನಿನ
ಅತ್ಯುತ್ತಮವಾದ ಟಗರುಗಳನ್ನೂ ಕೊಟ್ಟನು.
ಜೊತೆಗೆ ಉತ್ತಮವಾದ ಗೋಧಿಯನ್ನೂ
ಕೊಟ್ಟನು. ಇಸ್ರೇಲಿನ ಜನರು ದ್ರಾಕ್ಷಿಯ ಕೆಂಪು
ರಸದಿಂದ ಮಾಡಿದ ದ್ರಾಕ್ಷಾರಸವನ್ನು ಕುಡಿದರು.

15 ‘‘ಆದರೆ ಯೆಶುರೂನು* ಕೊಬ್ಬಿದನು; ಕೊಬ್ಬಿದ
ಹೋರಿಯಂತೆ ಒದ್ದನು; ಅವನು ಚೆನ್ನಾಗಿ ತಿಂದು
ಕೊಬ್ಬಿ ಊದಿಕೊಂಡನು; ತನ್ನ ನಿರ್ಮಾಣಿಕನಾದ
ಯೆಹೋವನನ್ನು ತೊರೆದನು; ತನ್ನನ್ನು ಸಂರ
ಕ್ಷಿಸಿದ ಬಂಡೆಯಿಂದ ಓಡಿಹೋದನು;
16 ದೇವಜನರು ಯೆಹೋವನಿಗೆ ಈರ್ಷೆಯನ್ನು
ಉಂಟುಮಾಡಿದರು. ಅವರು ಇತರ ದೇವರು
ಗಳನ್ನು ಪೂಜಿಸಿದರು; ಅಸಹ್ಯ ವಿಗ್ರಹಗಳನ್ನು
ಅವರು ಪೂಜಿಸಿದರು. ಅದು ಯೆಹೋವನನ್ನು
ಕೋಪಗೊಳಿಸಿತು.
17 ಅವರು ದೆವ್ವಗಳಿಗೆ ಯಜ್ಞವನ್ನರ್ಪಿಸಿದರು. ಅವು
ಗಳು ನಿಜ ದೇವರುಗಳಲ್ಲ. ಅವುಗಳು ಮಾಡಲ್ಪಟ್ಟ
ದೇವರುಗಳೆಂದು ಅವರಿಗೆ ಗೊತ್ತಿರಲಿಲ್ಲ.
ಅವುಗಳು ಕೈಯಿಂದ ಮಾಡಲ್ಪಟ್ಟ ದೇವರುಗಳು.
ಅವರ ಪೂರ್ವಿಕರಿಗೆ ತಿಳಿಯದಂಥ
ದೇವರುಗಳು.
18 ನೀವು ನಿಮ್ಮನ್ನು ನಿರ್ಮಿಸಿದ ಬಂಡೆಯನ್ನು
(ದೇವರನ್ನು) ತೊರೆದುಬಿಟ್ಟಿರಿ; ನಿಮಗೆ ಪ್ರಾಣ
ವನ್ನು ಕೊಟ್ಟ ದೇವರನ್ನು ನೀವು ಮರೆತುಬಿಟ್ಟಿರಿ.
19 ಯೆಹೋವನು ಇದನ್ನು ನೋಡಿ ಕೋಪ
ಗೊಂಡನು. ಆತನ ಮಕ್ಕಳೇ ಆತನನ್ನು ಸಿಟ್ಟಿ
ಗೆಬ್ಬಿಸಿದರು.
20 ಆಗ ಯೆಹೋವನು, ‘ನಾನು ಅವರಿಗೆ ವಿಮುಖ
ನಾಗುವೆನು. ಆಗ ಅವರಿಗೇನು ಸಂಭವಿಸು
ವುದೋ ನೋಡೋಣ. ಅವರು ಎದರುಬೀಳುವ
ಜನರಾಗಿದ್ದಾರೆ. ಅವರು ತಮ್ಮ ಪಾಠಗಳನ್ನು
ಕಲಿಯದ ಮಕ್ಕಳಂತಿದ್ದಾರೆ.
21 ಅವರು ದೆವ್ವಗಳನ್ನು ದೇವರನ್ನಾಗಿ ಮಾಡಿ ನನ್ನಲ್ಲಿ
ಈರ್ಷೆಯನ್ನು ಉಂಟು ಮಾಡಿದರು. ಆ ವಿಗ್ರಹ
ಗಳು ನಿಜವಾದ ದೇವರುಗಳಲ್ಲ! ಅವರು
ಪ್ರಯೋಜನವಿಲ್ಲದ ವಿಗ್ರಹಗಳನ್ನು ಮಾಡಿ
ನನ್ನನ್ನು ಸಿಟ್ಟಿಗೆಬ್ಬಿಸಿದರು. ಆದುದರಿಂದ ನಿಜ
ವಾದ ಜನಾಂಗವಲದವರಿಂದ ನಾನು ಅವರಲ್ಲಿ
ಈರ್ಷೆಯನ್ನು ಉಂಟು ಮಾಡುವೆನು. ಮೂರ್ಖ
ಜನಾಂಗದಿಂದ ಅವರನ್ನು ಸಿಟ್ಟಿಗೆಬ್ಬಿಸುವೆನು.
22 ನನ್ನ ಕೋಪವು ಬೆಂಕಿಯಂತೆ ದಹಿಸುವುದು;
ಪಾತಾಳವನ್ನು ಸುಡುವುದು. ಭೂಮಿಯನ್ನೂ
ಅದರಲ್ಲಿರುವ ಸಕಲ ವಸ್ತುಗಳನ್ನೂ ಸುಡುವುದು.
ಪರ್ವತಗಳ ಬುಡದ ಕೆಳಗೂ ದಹಿಸುವುದು.
23 ‘‘ನಾನು ಇಸ್ರೇಲಿಗೆ ಸಂಕಟವನ್ನು ಬರಮಾಡು
ವೆನು. ನನ್ನ ಬಾಣಗಳನ್ನೆಲ್ಲಾ ಅದಕ್ಕೆ ಬಿಡುವೆನು.
24 ಹಸಿವೆಯಿಂದ ಅವರು ಕ್ಷೀಣವಾಗುವರು;
ಭಯಂಕರ ವ್ಯಾಧಿಯಿಂದ ಅವರು ನಾಶ
ವಾಗುವುರು. ಕಾಡು ಪ್ರಾಣಿಗಳನ್ನು ಅವರ ಮಧ್ಯೆ
ಕಳುಹಿಸುವೆನು. ವಿಷಸರ್ಪಗಳೂ ಹಲ್ಲಿಗಳೂ
ಅವರನ್ನು ಕಚ್ಚುವವು.
25 ರಸ್ತೆಗಳಲ್ಲಿ ಸಿಪಾಯಿಯವರು ಅವರನ್ನು ಕೊಲ್ಲು
ವರು. ಅವರ ಮನೆಗಳಲ್ಲಿ ಭಯಂಕರ ಸಂಗ
ತಿಗಳು ನಡೆಯುವವು. ಯೌವನ ಪುರುಷರನ್ನೂ
ಸ್ತ್ರೀಯರನ್ನೂ ಸಿಪಾಯಿಯವರು ಕೊಲುವರು,
ಮುದುಕರನ್ನೂ ಎಳೆ ಗೂಸುಗಳನ್ನೂ
ಸಂಹರಿಸುವರು.

---

**ಯೆಶೂರೂನ** ಇದು ಇಸ್ರೇಲಿನ ಮತ್ತೊಂದು ಹೆಸರು. ಇದರರ್ಥ: ‘‘ಒಳ್ಳೆಯ’’ ಅಥವಾ ‘‘ಯಥಾರ್ಥ.’’

26 ನಾನು ಇಸ್ರೇಲರನ್ನು ಸಂಪೂರ್ಣವಾಗಿ ನಿರ್ಮೂಲ ಮಾಡಲು ಯೋಚಿಸಿದೆನು. ಲೋಕದಲ್ಲಿ ಅವರ ಹೆಸರು ಉಳಿಯದಂತೆ ಮಾಡುವೆನು ಎಂದು ನೆನಸಿದೆನು.
27 ಆದರೆ ಅವರ ವೈರಿಗಳು ಏನು ಹೇಳುತ್ತಾರೆಂಬುದು ನನಗೆ ಗೊತ್ತಿದೆ. ವೈರಿಯು ಅರ್ಥಮಾಡಿಕೊಳ್ಳುವುದಿಲ್ಲ. ಅವರಿಗೆ ವಿಷಯವು ತಿಳಿಯದು. ಅವರ ಜಂಭದಿಂದ, ''ಯೆಹೋವನು ಇಸ್ರೇಲನ್ನು ನಾಶಮಾಡಲಿಲ್ಲ. ನಾವು ನಮ್ಮ ಬಲದಿಂದಲೇ ಅವರನ್ನು ಬಡಿದು ಹಾಕಿದೆವು.''

28 ''ಇಸ್ರೇಲರು ಬುದ್ಧಿಹೀನರಾಗಿದ್ದಾರೆ; ಅವರಿಗೇನೂ ತಿಳಿಯುವುದಿಲ್ಲ.
29 ಅವರು ಬುದ್ಧಿವಂತರಾಗಿದ್ದಲ್ಲಿ ಅವರಿಗೆ ಏನು ಸಂಭವಿಸುವುದೆಂದು ಅವರು ತಿಳಿಯುತ್ತಿದ್ದರು.
30 ಒಬ್ಬನು ಸಾವಿರ ಮಂದಿಯನ್ನು ಓಡಿಸಬಲ್ಲನೇ? ಇಬ್ಬರು ಹತ್ತು ಸಾವಿರ ಮಂದಿಯನ್ನು ಓಡಿಸುವರೇ? ಯೆಹೋವನು ಅವರನ್ನು ಅವರ ಶತ್ರುಗಳಿಗೆ ಒಪ್ಪಿಸುವಾಗ ಹಾಗೆಯೇ ಆಗುವುದು, ಅವರ ಬಂಡೆಯಾದ ದೇವರು ಅವರನ್ನು ಗುಲಾಮರನ್ನಾಗಿ ಮಾರುವನು;
31 ನಮ್ಮ ವೈರಿಗಳ ಬಂಡೆಯು ನಮ್ಮ ಬಂಡೆಯಂತೆ ಬಲಶಾಲಿಯಲ್ಲ. ವೈರಿಗಳಿಗೂ ಇದು ಗೊತ್ತಿದೆ.
32 ಅವರ ಹೊಲಗಳೂ ದ್ರಾಕ್ಷಾಲತೆಗಳೂ ಸೊದೋಮ್ ಗೊಮೋರಗಳಂತೆ ನಾಶ ಮಾಡಲ್ಪಡುವುವು.
33 ಅವರ ದ್ರಾಕ್ಷೆಯು ವಿಷದಂತೆಯೂ ಅವರ ದ್ರಾಕ್ಷಾರಸವು ಹಾವಿನ ವಿಷದಂತೆಯೂ ಕಹಿಯಾಗಿವೆ.

34 ''ಯೆಹೋವನು ಹೀಗನ್ನುತ್ತಾನೆ: 'ಆ ಶಿಕ್ಷೆಯನ್ನು ನಾನು ಜೋಪಾನವಾಗಿಟ್ಟಿದ್ದೇನೆ. ಅದನ್ನು ನಾನು ನನ್ನ ಉಗ್ರಾಣದಲ್ಲಿ ಸುರಕ್ಷಿತವಾಗಿರಿಸಿದ್ದೇನೆ.
35 ಅವರ ದುಷ್ಕಾರ್ಯಗಳಿಗಾಗಿ ನಾನು ಅವರನ್ನು ಶಿಕ್ಷಿಸುವೆನು. ಅವರು ಜಾರಿ ಕೆಟ್ಟ ಕಾರ್ಯಗಳನ್ನು ಮಾಡಿದಾಗ ನಾನು ಅವರನ್ನು ಶಿಕ್ಷಿಸುವೆನು. ಅವರ ಮಹಾಸಂಕಟ ಕಾಲವು ಹತ್ತಿರವೇ ಇದೆ. ಅವರ ಶಿಕ್ಷೆಯು ಬೇಗನೆ ಬರುತ್ತದೆ.'

36 ''ಯೆಹೋವನು ತನ್ನ ಜನರಿಗೆ ನ್ಯಾಯ ತೀರಿಸುವನು. ಅವರು ಆತನ ಸೇವಕರಾಗಿದ್ದಾರೆ. ಆತನು ಅವರಿಗೆ ಕರುಣೆ ತೋರಿಸುವನು. ಅವರ ಬಲವು ಕುಂದುವಂತೆ ಮಾಡುವನು. ಗುಲಾಮರಾಗಿರಲೀ ಸ್ವತಂತ್ರರಾಗಿರಲೀ ಅವರನ್ನು ಆತನು ನಿಸ್ಸಹಾಯಕರನ್ನಾಗಿ ಮಾಡುವನು.
37 ಆಗ ಯೆಹೋವನು ಇಂತೆನ್ನುವನು: 'ನಿಮ್ಮ ಸುಳ್ಳು ದೇವರುಗಳೆಲ್ಲಿ? ನಿಮ್ಮ ಸಂರಕ್ಷಣೆಗಾಗಿ ನೀವು ಓಡಿದ 'ಬಂಡೆ' ಎಲ್ಲಿ?
38 ನಿಮ್ಮ ಯಜ್ಞಗಳ ಕೊಬ್ಬನ್ನು ಆ ಸುಳ್ಳು ದೇವರುಗಳು ತಿಂದುಬಿಟ್ಟವು. ನೀವು ಅರ್ಪಿಸಿದ ದ್ರಾಕ್ಷಾರಸವನ್ನು ಕುಡಿದು ಬಿಟ್ಟವು. ಆ ದೇವರುಗಳೆದ್ದು ನಿಮಗೆ ಸಹಾಯಮಾಡಲಿ. ಅವುಗಳು ನಿಮ್ಮನ್ನು ಸಂರಕ್ಷಿಸಲಿ.
39 ನಾನೇ ದೇವರು, ನನ್ನ ಹೊರತು ಬೇರೆ ದೇವರಿಲ್ಲ. ಜನರಿಗೆ ಮರಣವನ್ನೂ ಜೀವವನ್ನೂ ಕೊಡುವವನು ನಾನೇ. ಅವರಿಗೆ ಗಾಯ ಮಾಡುವವನೂ ನಾನೇ. ಅದನ್ನು ಗುಣಮಾಡುವವನೂ ನಾನೇ. ನನ್ನ ಶಕ್ತಿಯ ಹಿಡಿತದಿಂದ ಇನ್ನೊಬ್ಬನನ್ನು ರಕ್ಷಿಸಲು ಯಾರಿಗೂ ಸಾಧ್ಯವಿಲ್ಲ.
40 ನನ್ನ ಕೈಗಳನ್ನು ಆಕಾಶದ ಕಡೆಗೆತ್ತಿ ವಚನ ಕೊಡುತ್ತೇನೆ. ನಾನು ನಿತ್ಯಕಾಲಕ್ಕೆ ಜೀವಿಸುವುದು ಎಷ್ಟು ಸತ್ಯವೋ ಅದೇ ರೀತಿ ಇವೆಲ್ಲವೂ ನೆರವೇರುವದು.
41 ಝಳಝಳಿಸುವ ನನ್ನ ಖಡ್ಗವನ್ನು ನಾನು ಹದ ಮಾಡುವೆನು. ನನ್ನ ವೈರಿಗಳನ್ನು ಶಿಕ್ಷಿಸಲು ನಾನದನ್ನು ಉಪಯೋಗಿಸುವೆನು. ನಾನು ಅವರಿಗೆ ಯೋಗ್ಯವಾದ ದಂಡನೆಯನ್ನು ಕೊಡುವೆನು ಎಂದು ನಾನು ಆಣೆಯಿಟ್ಟು ಹೇಳುತ್ತೇನೆ.
42 ನನ್ನ ವೈರಿಗಳು ಕೊಲ್ಲಲ್ಪಡುವರು ಮತ್ತು ಸೆರೆಯಾಳುಗಳಾಗಿ ಒಯ್ಯಲ್ಪಡುವರು. ನನ್ನ ಬಾಣಗಳು ಅವರ ರಕ್ತದಿಂದ ಮುಚ್ಚಲ್ಪಟ್ಟಿವೆ. ನನ್ನ ಖಡ್ಗವು ಅವರ ಸೈನಿಕರ ರುಂಡ ಹಾರಿಸುವುದು.'

43 ''ಭೂಲೋಕವೆಲ್ಲಾ ದೇವಜನರಿಗಾಗಿ ಸಂತೋಷಿಸುವದು; ಯಾಕಂದರೆ ಆತನು ಅವರನ್ನು ಸಹಾಯಿಸುವನು; ತನ್ನ ಸೇವಕರನ್ನು ಹತಿಸುವವರನ್ನು ಶಿಕ್ಷಿಸುವನು; ತನ್ನ ವೈರಿಗಳಿಗೆ ತಕ್ಕ ಶಾಸ್ತಿಯನ್ನು ಮಾಡುವನು; ತನ್ನ ದೇಶವನ್ನೂ ತನ್ನ ಜನರನ್ನೂ ಶುದ್ಧಿ ಮಾಡುವನು.''

### ಮೋಶೆಯು ಜನರಿಗೆ ಹಾಡನ್ನು ಕಲಿಸಿದನು

44 ಮೋಶೆಯು ಈ ಹಾಡಿನ ಎಲ್ಲಾ ಪದಗಳನ್ನು
ಇಸ್ರೇಲರು ಕೇಳುವಂತೆ ಹೇಳಿದನು. ನೂನನ ಮಗನಾದ
ಯೆಹೋಶುವನು ಮೋಶೆಯ ಸಂಗಡ ಇದ್ದನು.

[45]ಮೋಶೆಯು ಜನರಿಗೆ ಬೋಧಿಸಿದ ಬಳಿಕ [46]ಹೀಗೆ ಹೇಳಿದನು: ‘‘ನಾನು ಈ ದಿನ ಹೇಳಿದ ಎಲ್ಲಾ ಆಜ್ಞೆಗಳನ್ನು ಅನುಸರಿಸಲು ಜಾಗರೂಕರಾಗಿರಿ. ಅವುಗಳನ್ನು ನಿಮ್ಮ ಮಕ್ಕಳಿಗೂ ತಿಳಿಸಿ; ಕಟ್ಟಳೆಗಳನ್ನು ಸಂಪೂರ್ಣವಾಗಿ ಕೈಗೊಳ್ಳುವಂತೆ ಅವರಿಗೆ ಬೋಧಿಸಿರಿ, ಕಲಿಸಿರಿ. [47]ಈ ಬೋಧನೆಗಳು ಮುಖ್ಯವಾದವುಗಳಲ್ಲ ಎಂದು ತಿಳಿಯಬೇಡಿ. ಅವು ನಿಮ್ಮ ಜೀವವಾಗಿವೆ. ನೀವು ತೆಗೆದುಕೊಳ್ಳಲು ಸಿದ್ಧರಾಗಿರುವ ಜೋರ್ಡನ್ ನದಿಯ ಆಚೆಕಡೆಯಲ್ಲಿರುವ ದೇಶದಲ್ಲಿ ಈ ಉಪದೇಶಗಳ ಮೂಲಕ ಬಹುಕಾಲ ಬದುಕುವಿರಿ.’’

## ನೆಬೋ ಪರ್ವತದ ಮೇಲೆ ಮೋಶೆ

[48]ಅದೇ ದಿನದಲ್ಲಿ ಯೆಹೋವನು ಮೋಶೆಯೊಂದಿಗೆ ಮಾತನಾಡಿ, [49]‘‘ಮೋವಾಬ್ ಪ್ರಾಂತ್ಯದಲ್ಲಿರುವ ಅಬಾರೀಮ್ ಪರ್ವತ ಸಾಲಿಗೆ ಹೋಗಿ ಅಲ್ಲಿ ನೆಬೋ ಪರ್ವತವನ್ನೇರು. ಇದು ಯೆರಿಕೋ ಕೋಟೆಗೆ ಎದುರಾಗಿ ಇದೆ. ಅಲ್ಲಿಂದ ನಾನು ಇಸ್ರೇಲರಿಗೆ ಕೊಡುವ ಕಾನಾನ್ ದೇಶವನ್ನು ನೀನು ನೋಡುವಿ. [50]ನಿನ್ನ ಅಣ್ಣನಾದ ಆರೋನನು ಹೋರ್ ಬೆಟ್ಟದಲ್ಲಿ ಸತ್ತುಹೋದಂತೆಯೇ ನೀನೂ ನೆಬೋ ಪರ್ವತದ ಮೇಲೆ ಸಾಯುವೆ. [51]ಯಾಕಂದರೆ ನೀವಿಬ್ಬರೂ ನನಗೆ ವಿರುದ್ಧವಾಗಿ ಪಾಪ ಮಾಡಿದಿರಿ. ಚಿನ್ ಮರುಭೂಮಿಯಲ್ಲಿರುವ ಕಾದೇಶ್ ಬಳಿಯಲ್ಲಿದ್ದ ಮೆರೀಬಾ ಎಂಬ ಸ್ಥಳದ ನೀರಿನ ಬಳಿಯಲ್ಲಿ ನೀನು ಜನರ ಮುಂದೆ ನನ್ನನ್ನು ಅವಮಾನಪಡಿಸಿದೆ. ನೀನು ನನ್ನನ್ನು ಮಹಾಪವಿತ್ರನೆಂದು ಗೌರವಿಸಬೇಕಿತ್ತು. ಆದರೆ ನೀನು ಗೌರವಿಸಲಿಲ್ಲ. [52]ಆದುದರಿಂದ ನಾನು ಇಸ್ರೇಲರಿಗೆ ಕೊಡುವ ದೇಶವನ್ನು ನೀನು ನೋಡುವೆ ಆದರೆ ಅದನ್ನು ಪ್ರವೇಶಿಸುವುದಿಲ್ಲ.’’

## ಮೋಶೆ ಇಸ್ರೇಲರನ್ನು ಆಶೀರ್ವದಿಸಿದ್ದು

33 ದೇವರ ಮನುಷ್ಯನಾದ ಮೋಶೆಯು ತಾನು ಸಾಯುವ ಮೊದಲು ಇಸ್ರೇಲರನ್ನು ಆಶೀರ್ವದಿಸಿದನು. [2]ಮೋಶೆಯು ಹೇಳಿದ್ದೇನೆಂದರೆ:

‘‘ಸೇಯೀರ್‌ನಲ್ಲಿ ಮುಂಜಾನೆಯ ಬೆಳಕು ಪ್ರಕಾಶಿಸುವಂತೆ ಪಾರಾನ್ ಪರ್ವತಗಳ ಮೇಲಿನಿಂದ ಬೆಳಕು ಪ್ರಕಾಶಿಸುವಂತೆ ಯೆಹೋವನು ಸೀನಾಯಿನಿಂದ ಬಂದನು. ಆತನು ಹತ್ತು ಸಾವಿರ ಪರಿಶುದ್ಧರೊಂದಿಗೆ ಬಂದನು. ಆತನ ಬಲಶಾಲಿಗಳಾದ ಸೈನಿಕರು ಆತನೊಂದಿಗಿದ್ದರು.

3 ಹೌದು, ಯೆಹೋವನು ತನ್ನ ಜನರನ್ನು ಪ್ರೀತಿಸುತ್ತಾನೆ. ಪವಿತ್ರ ಜನರೆಲ್ಲರೂ ಆತನ ಕೈಗಳಲ್ಲಿರುವರು. ಆತನ ಕಾಲಬಳಿಯಲ್ಲಿ ಕುಳಿತುಕೊಂಡು ಬೋಧನೆಯನ್ನು ಕೇಳುವರು.

4 ಮೋಶೆಯು ಧರ್ಮಶಾಸ್ತ್ರವನ್ನು ಯಾಕೋಬನ ವಂಶದವರಿಗೆ ಕೊಟ್ಟನು.

5 ಆಗ ಇಸ್ರೇಲಿನ ಜನರು ತಮ್ಮ ನಾಯಕರೊಂದಿಗೆ ಒಟ್ಟಾಗಿ ಸೇರಿದರು. ಅವರ ದೇವರರು ಯೆಶುರೂನಿನಲ್ಲಿ* ಅರಸನಾದನು.

## ರೂಬೇನನಿಗೆ ಆಶೀರ್ವಾದ

6 ‘‘ರೂಬೇನನು ನಾಶವಾಗದೆ ಉಳಿಯಲಿ ಆದರೆ ಅವನ ಕುಲದವರಲ್ಲಿ ಕೆಲವೇ ಮಂದಿ ಇರುವರು.’’

## ಯೆಹೂದನಿಗೆ ಆಶೀರ್ವಾದ

[7]ಯೆಹೂದನ ವಿಷಯವಾಗಿ ಮೋಶೆ ಹೇಳಿದ ಮಾತುಗಳು:

‘‘ಯೆಹೋವನೇ, ಯೆಹೂದದ ನಾಯಕನು ಸಹಾಯಕ್ಕಾಗಿ ಮೊರೆಯಿಡುವಾಗ ಅದನ್ನು ಆಲಿಸಿ ಅವನ ಜನರ ಬಳಿಗೆ ಕರೆದುಕೊಂಡು ಬಂದು ಅವರೊಂದಿಗೆ ಸೇರಿಸು. ಅವನನ್ನು ಬಲಗೊಳಿಸಿ ಶತ್ರುಗಳೊಂದಿಗೆ ಯುದ್ಧ ಮಾಡಲು ಸಹಾಯಿಸು.’’

## ಲೇವಿಯರಿಗೆ ಆಶೀರ್ವಾದ

[8]ಲೇವಿಯ ವಿಷಯವಾಗಿ ಮೋಶೆ ಹೇಳಿದ ಮಾತುಗಳು:

‘‘ಲೇವಿಯು ನಿನ್ನ ನಿಜವಾದ ಹಿಂಬಾಲಕ. ಅವನು ಊರೀಮ್ ತುಮ್ಮೀಮ್ ಇಟ್ಟುಕೊಂಡಿರುವನು. ಮಸ್ಸಾದಲ್ಲಿ ಲೇವಿಯರನ್ನು ನೀನು ಪರೀಕ್ಷಿಸಿದೆ. ಮೇರೀಬಾ ಬುಗ್ಗೆಯ ಬಳಿ ಅವರು ನಿನ್ನವರೆಂದು ನಿನಗೆ ಖಚಿತವಾಯಿತು.

9 ಯೆಹೋವನೇ, ಅವರು ನಿನಗಾಗಿ ಚಿಂತಿಸಿದರು; ಸ್ವಂತ ಸಂಸಾರಕ್ಕಿಂತಲೂ ಹೆಚ್ಚಾಗಿ ನಿನ್ನನ್ನು ಪ್ರೀತಿಸಿದರು; ಅವರು ನಿನಗಾಗಿ ತಮ್ಮ ತಂದೆ ತಾಯಿಗಳನ್ನು ನಿರ್ಲಕ್ಷಿಸಿದರು; ಒಡಹುಟ್ಟಿದವರನ್ನೂ ಗುರುತಿಸಲಿಲ್ಲ. ಅವರು ತಮ್ಮ ಮಕ್ಕಳಿಗೆ ಪ್ರಾಮುಖ್ಯತೆಯನ್ನು ಕೊಡಲಿಲ್ಲ; ಅವರು ನಿನ್ನ ಕಟ್ಟಳೆಗಳನ್ನು ಅನುಸರಿಸಿ ಒಡಂಬಡಿಕೆಯನ್ನು ಕಾಪಾಡಿದರು.

**ಯೆಶುರೂನ** ಇಸ್ರೇಲಿನ ಮತ್ತೊಂದು ಹೆಸರು. ಇದರರ್ಥ : ‘‘ಒಳ್ಳೆಯ’’ ಅಥವಾ ‘‘ಯಥಾರ್ಥ.

10 ಅವರು ಯಾಕೋಬ್ಯರಿಗೆ ನಿನ್ನ ವಿಧಿನಿಯಮ
ಗಳನ್ನು ಕಲಿಸುವರು; ನಿನ್ನ ಕಟ್ಟಳೆಗಳನ್ನು ಇಸ್ರೇಲ
ರಿಗೆ ಬೋಧಿಸುವರು. ಅವರು ನಿನ್ನ ಸನ್ನಿಧಾನ
ದಲ್ಲಿ ಧೂಪ ಹಾಕುವರು. ಬಲ ಪೀಠದಲ್ಲಿ ನಿನಗೆ
ಯಜ್ಞಾರ್ಪಣೆ ಮಾಡುವರು.
11 ಯೆಹೋವನೇ, ಲೇವಿಯರಿಗೆ ಇರುವಂಥದನ್ನು
ಆಶೀರ್ವದಿಸು; ಅವರು ಮಾಡಿದ್ದೆಲ್ಲಾ ನಿನಗೆ
ಮೆಚ್ಚಿಕೆಯಾಗಲಿ. ಅವರ ಮೇಲೆ ಬೀಳುವವರನ್ನು
ನಾಶಮಾಡು, ಅವರ ವೈರಿಗಳನ್ನು ಸೋಲಿಸು;
ಅವರು ಮತ್ತೆ ಲೇವಿಯರ ಮೇಲೆ ಬೀಳದಂತೆ
ಮಾಡು.''

### ಬೆನ್ಯಾಮೀನನಿಗೆ ಆಶೀರ್ವಾದ

12ಬೆನ್ಯಾಮೀನನ ವಿಷಯವಾಗಿ ಮೋಶೆಯು ಹೇಳಿ
ದ್ದೇನೆಂದರೆ:

'ಯೆಹೋವನು ಬೆನ್ಯಾಮೀನನನ್ನು ಪ್ರೀತಿಸುತ್ತಾನೆ.
ಆತನ ಬಳಿಯಲ್ಲಿ ಸುರಕ್ಷಿತವಾಗಿ ವಾಸ
ಮಾಡುತ್ತಾನೆ. ಯೆಹೋವನು ಅವನನ್ನು ಯಾವಾ
ಗಲೂ ಸಂರಕ್ಷಿಸುತ್ತಾನೆ. ಅವನ ಪ್ರಾಂತ್ಯದಲ್ಲಿ
ಯೆಹೋವನು ವಾಸಿಸುವನು.'

### ಯೋಸೇಫನಿಗೆ ಆಶೀರ್ವಾದ

13ಯೋಸೇಫನ ಪ್ರಾಂತ್ಯವನ್ನು ಯೆಹೋವನು ಆಶೀ
ರ್ವದಿಸಲಿ:

''ಯೆಹೋವನೇ, ಅವರಿಗೆ ಆಕಾಶದಿಂದ ಮಳೆ
ಸುರಿಸು, ನೆಲದಿಂದ ಬುಗ್ಗೆಯು ಹೊರ ಬರಲಿ;
14 ಸೂರ್ಯನು ಅವರಿಗೆ ಒಳ್ಳೆಯ ಫಲಗಳನ್ನು
ಕೊಡಲಿ; ಪ್ರತಿ ತಿಂಗಳು ಒಳ್ಳೆಯ ಫಲಗಳನ್ನು
ಕೊಡಲಿ.
15 ಬೆಟ್ಟಗುಡ್ಡಗಳು ಉತ್ತಮವಾದ ಫಲಗಳನ್ನು
ಫಲಿಸಲಿ.
16 ಭೂಮಿಯು ಒಳ್ಳೆಯದನ್ನು ಯೋಸೇಫನಿಗೆ
ಕೊಡಲಿ. ಯೋಸೇಫನು ತನ್ನ ಸಹೋದರರಿಂದ
ಬೇರ್ಪಡಿಸಿಕೊಂಡಿರುವನು. ಆದುದರಿಂದ
ಉರಿಯುವ ಪೊದೆಯಲ್ಲಿರುವ ಯೆಹೋವನು
ಉತಮವಾದವುಗಳನ್ನು ಯೋಸೇಫನಿಗೆ
ಕೊಡಲಿ.
17 ಯೋಸೇಫನು ಬಲಶಾಲಿಯಾದ ಗೂಳಿಯಂತಿ
ದ್ದಾನೆ. ಅವನ ಇಬ್ಬರು ಮಕ್ಕಳು ಗೂಳಿಯ
ಕೊಂಬುಗಳಂತೆ ಬೇರೆಯವರನ್ನು ದೂಡಿ
ಲೋಕದ ಅಂಚಿಗೆ ತಳ್ಳಿ ಬಿಡುತ್ತಾರೆ. ಮನಸ್ಸೆ
ಯೊಂದಿಗೆ ಸಾವಿರಗಟ್ಟಲೆ ಜನರಿದ್ದಾರೆ. ಎಫ್ರಾ
ಯೀಮನೊಂದಿಗೆ ಹತ್ತು ಸಾವಿರ ಜನರಿದ್ದಾರೆ.''

### ಜೆಬುಲೂನನಿಗೆ ಮತ್ತು ಇಸ್ಸಾಕಾರನಿಗೆ ಆಶೀರ್ವಾದಗಳು

18ಮೋಶೆಯು ಜೆಬೂಲೂನ್ ವಿಷಯವಾಗಿ ಹೇಳಿ
ದ್ದೇನೆಂದರೆ:

''ಜೆಬುಲೂನನೇ, ನೀನು ಹೊರಗೆ ಹೋಗುವಾಗ
ಸಂತೋಷವಾಗಿರು. ಇಸ್ಸಾಕಾರನೇ, ನೀನು ನಿನ್ನ
ಗುಡಾರದೊಳಗಿರುವಾಗ ಸಂತೋಷದಿಂದಿರು.
19 ಅವರು ತಮ್ಮ ಪರ್ವತಗಳಿಗೆ ಜನರನ್ನು ಕರೆ
ಯುವರು. ಅಲ್ಲಿ ಅವರು ಉತ್ತಮ ಯಜ್ಞವನ್ನು
ಅರ್ಪಿಸುವರು. ಸಮುದ್ರದಿಂದ ಐಶ್ವರ್ಯವನ್ನು
ತೆಗೆಯುವರು. ಸಮುದ್ರ ದಡದಿಂದ
ನಿಕ್ಷೇಪವನ್ನೆತ್ತುವರು.''

### ಗಾದನಿಗೆ ಆಶೀರ್ವಾದಗಳು

20ಗಾದನಿಗೆ ಮೋಶೆಯು ಹೇಳಿದ್ದೇನೆಂದರೆ:

''ಗಾದನಿಗೆ ವಿಸ್ತಾರವಾದ ಪ್ರಾಂತ್ಯವನ್ನು ಕೊಟ್ಟ
ದೇವರಿಗೆ ಸ್ತೋತ್ರ. ಗಾದನು ಸಿಂಹದಂತಿರು
ವನು; ಹೊಂಚು ಹಾಕುತ್ತಾ ಕಾಯುತ್ತಾ
ಇರುವನು. ಫಕ್ಕನೆ ಪ್ರಾಣಿಯ ಮೇಲೆ ಹಾರಿ
ಅದನ್ನು ಸೀಳಿಬಿಡುವನು.
21 ಅದರ ಒಳ್ಳೆಯ ಭಾಗವನ್ನು ತನಗೆ ಆರಿಸಿ
ಕೊಳ್ಳುವನು. ರಾಜನ ಭಾಗವನ್ನು ತಾನಿಟ್ಟು
ಕೊಳ್ಳುವನು. ಜನರ ನಾಯಕರು ಆತನ ಬಳಿಗೆ
ಬರುವರು. ಯೆಹೋವನು ಒಳ್ಳೆಯ ದೆಂದು
ಹೇಳುವ ಕಾರ್ಯಗಳನ್ನು ಮಾಡುವನು.
ಇಸ್ರೇಲ್ ಜನರಿಗೆ ಸರಿಯಾದ ಕಾರ್ಯವನ್ನೇ
ಮಾಡುವನು.''

### ದಾನನಿಗೆ ಆಶೀರ್ವಾದಗಳು

22ಮೋಶೆಯು ದಾನನ ವಿಷಯವಾಗಿ ಹೀಗೆ
ಹೇಳಿದನು:

''ದಾನನು ಸಿಂಹದ ಮರಿ; ಬಾಷಾನಿನಿಂದ
ನೆಗೆಯುವನು.''

### ನಫ್ತಾಲಿಗೆ ಆಶೀರ್ವಾದಗಳು

23ಮೋಶೆಯು ನಫ್ತಾಲಿಯ ವಿಷಯವಾಗಿ ಹೇಳಿದ
ಮಾತುಗಳು:

‘‘ನಫ್ತಾಲಿಯೇ, ನಿನಗೆ ಉತ್ತಮವಾದ ವಸ್ತುಗಳು ಅಧಿಕವಾಗಿ ದೊರೆಯುತ್ತವೆ. ಯೆಹೋವನು ನಿನ್ನನ್ನು ನಿಜವಾಗಿಯೂ ಆಶೀರ್ವದಿಸುವನು. ಗಲಿಲಾಯದ ಬಳಿಯಲಿರುವ ಪ್ರಾಂತ್ಯವು ನಿನಗೆ ದೊರಕುವದು.’’

### ಆಶೇರನಿಗೆ ಆಶೀರ್ವಾದ

24 ಆಶೇರನ ವಿಷಯವಾಗಿ ಮೋಶೆಯ ಮಾತುಗಳು:

‘‘ಮಕ್ಕಳಲ್ಲಿ ಅಶೇರನೇ ಹೆಚ್ಚಾಗಿ ಆಶೀರ್ವದಿಸಲ್ಪಟ್ಟವನು. ಅವನ ಅಣ್ಣತಮ್ಮಂದಿರೊಳಗೆ ಅವನೇ ಅಚ್ಚುಮೆಚ್ಚಿನವನಾಗಲಿ. ಎಣ್ಣೆಯಲ್ಲಿ ಅವನು ತನ್ನ ಕಾಲುಗಳನ್ನು ತೊಳೆಯಲಿ.

25 ನಿನ್ನ ಬಾಗಿಲುಗಳಲ್ಲಿ ಬೀಗವಿರುವದು. ಅವು ಕಬ್ಬಿಣದಿಂದಲೂ ಹಿತ್ತಾಳಿಯಿಂದಲೂ ಮಾಡಲ್ಪಟ್ಟವೆ. ನಿನ್ನ ಜೀವಮಾನ ಕಾಲವೆಲ್ಲಾ ನೀನು ಬಲಶಾಲಿಯಾಗಿರುವೆ.’’

### ಮೋಶೆಯು ದೇವರನ್ನು ಸ್ತುತಿಸುವುದು

26 ಯೆಶುರೂನೇ, ‘‘ನಮ್ಮ ದೇವರ ಹಾಗೆ ಬೇರೆ ದೇವರುಗಳಿಲ್ಲ. ಮೋಡಗಳ ಮೇಲೆ ಮಹಿಮಾರೂಢನಾಗಿ ಸವಾರಿ ಮಾಡುತ್ತಾ ಆಕಾಶದಿಂದ ನಿನಗೆ ಸಹಾಯಿಸಲು ಬರುವನು.

27 ಆತನು ನಿರಂತರಕ್ಕೂ ಜೀವಿಸುವವನಾಗಿದ್ದಾನೆ. ಆತನೇ ನಿನ್ನ ಆಶ್ರಯಸ್ಥಾನ. ಆತನ ಸಾಮರ್ಥ್ಯ ಸದಾಕಾಲವಿರುವದು. ಆತನು ನಿನ್ನನ್ನು ಸಂರಕ್ಷಿಸಿ ಕಾಪಾಡುವನು; ನಿನ್ನ ದೇಶವನ್ನು ಬಿಟ್ಟು ಹೋಗಲು ಜನರನ್ನು ದೂಡುವನು; ‘ವೈರಿಗಳನ್ನು ನಾಶ ಮಾಡಿರಿ’ ಎಂದು ಹೇಳುವನು.

28 ಇಸ್ರೇಲ್ ಸುರಕ್ಷಿತವಾಗಿ ಜೀವಿಸುವುದು. ಯಾಕೋಬನ ಬಾವಿ ಅವರ ವಶದಲ್ಲಿದೆ. ಧಾನ್ಯದ ಮತ್ತು ದ್ರಾಕ್ಷಾರಸದ ದೇಶವು ಅವರಿಗೆ ದೊರಕುತ್ತದೆ. ಆ ದೇಶಕ್ಕೆ ಅಧಿಕವಾಗಿ ಮಳೆ ಸುರಿಯುವುದು.

29 ಇಸ್ರೇಲೇ, ನೀನು ಆಶೀರ್ವದಿಸಲ್ಪಟ್ಟವನು. ನಿನ್ನ ಹಾಗೆ ಯಾವ ದೇಶವೂ ಇರದು. ಯೆಹೋವನು ನಿನ್ನನ್ನು ರಕ್ಷಿಸಿದನು. ಆತನು ನಿನ್ನನ್ನು ಕಾಪಾಡುವ ಬಲವಾದ ಗುರಾಣಿ. ಆತನು ನಿನಗೆ ಶಕ್ತಿಯುತವಾದ ಖಡ್ಗ. ವೈರಿಗಳು ನಿನಗೆ ಭಯಪಡುವರು. ನೀನು ಅವರ ಪವಿತ್ರ ಸ್ಥಳವನ್ನು ತುಳಿದುಬಿಡುವೆ!’’

### ಮೋಶೆಯ ಮರಣ

34 ಮೋಶೆಯು ನೆಬೋ ಬೆಟ್ಟವನ್ನು ಹತ್ತಿದನು.
ಅವನು ಮೋವಾಬಿನ ಜೋರ್ಡನ್ ಕಣಿವೆ
ಯಿಂದ ಪಿಸ್ಗಾ ಬೆಟ್ಟದ ಮೇಲಕ್ಕೆ ಬಂದನು. ಇದು
ಜೋರ್ಡನ್ ನದಿಯ ಆಚೆಕಡೆಯಲ್ಲಿರುವ ಯೆರಿಕೋ
ಊರಿನ ಎದುರಿನಲ್ಲಿದೆ. ಯೆಹೋವನು ಮೋಶೆಗೆ
ಗಿಲ್ಯಾದಿನಿಂದ ದಾನ್‌ವರೆಗಿದ್ದ ಎಲ್ಲಾ ಪ್ರದೇಶವನ್ನು
ತೋರಿಸಿದನು. 2 ಮೋಶೆಗೆ ಯೆಹೋವನು ನಫ್ತಾಲಿ,
ಎಫ್ರಾಯೀಮ್. ಮನಸ್ಸೆ ಪ್ರಾಂತ್ಯಗಳನ್ನು ತೋರಿಸಿದನು.
ಯೆಹೂದ ಪ್ರಾಂತ್ಯವನ್ನು ಮೆಡಿಟರೇನಿಯನ್ ಸಮುದ್ರ
ದವರೆಗೂ ತೋರಿಸಿದನು. 3 ಯೆಹೋವನು ಮೋಶೆಗೆ
ನೆಗೆವ್ ಮತ್ತು ಚೋಗರೂರಿನಿಂದ ಖರ್ಜೂರದ ಮರ
ಗಳ ಪಟ್ಟಣವಾದ ಯೆರಿಕೋ ಪಟ್ಟಣದವರೆಗಿರುವ ಕಣಿವೆ
ಯನ್ನು ತೋರಿಸಿದನು. 4 ಯೆಹೋವನು ಮೋಶೆಗೆ ಹೇಳಿ
ದ್ದೇನೆಂದರೆ: ‘‘ಈ ದೇಶವನ್ನು ನಾನು ಅಬ್ರಹಾಮನಿಗೆ,
ಇಸಾಕನಿಗೆ, ಯಾಕೋಬನಿಗೆ ವಾಗ್ದಾನ ಮಾಡಿದ್ದೇನೆ.
ನಿಮ್ಮ ಸಂತತಿಯವರಿಗೆ ನಾನು ಈ ದೇಶವನ್ನು ಕೊಡು
ವೆನು ಎಂದು ಹೇಳಿದ್ದೆನು. ಆ ದೇಶವನ್ನು ನೀನು ನೋಡು
ವಂತೆ ಮಾಡಿದೆನು. ಆದರೆ ನೀನು ಅದರೊಳಗೆ
ಪ್ರವೇಶಿಸುವುದಿಲ್ಲ.’’

ಮೋವಾಬ್ ದೇಶದಲ್ಲಿ ಯೆಹೋವನ ಸೇವಕನಾದ
ಮೋಶೆಯು ಸತ್ತು ಹೋದನು. ಯೆಹೋವನು ಅವನಿಗೆ
ಹಾಗೆ ಆಗುತ್ತದೆಂದು ಮುಂಚೆಯೇ ತಿಳಿಸಿದ್ದನು.
6 ಯೆಹೋವನು ಮೋಶೆಯನ್ನು ಮೋವಾಬ್‌ನಲ್ಲಿ ಹೂಳಿ
ಟ್ಟನು. ಇದು ಬೇತ್ಪೆಗೋರ್ ತಗ್ಗಿಗೆ ಎದುರಾಗಿದೆ. ಆದರೆ
ಮೋಶೆಯನ್ನು ಸಮಾಧಿ ಮಾಡಿದ ಸ್ಥಳವು ಇದುವರೆಗೆ
ಯಾರಿಗೂ ಗೊತ್ತಾಗಲಿಲ್ಲ. 7 ಮೋಶೆಯು ಸಾಯುವಾಗ
ನೂರಿಪ್ಪತ್ತು ವರ್ಷದವನಾಗಿದ್ದನು. ಅವನು ಸಾಯುವ
ತನಕ ಬಲಶಾಲಿಯಾಗಿಯೇ ಇದ್ದನು. ಅವನ ಕಣ್ಣು
ಮೊಬ್ಬಾಗಿರಲಿಲ್ಲ. 8 ಇಸ್ರೇಲರು ಮೋಶೆಗಾಗಿ ಮೂವತ್ತು
ದಿವಸಗಳ ತನಕ ಗೋಳಾಡಿದರು. ಶೋಕದ ದಿವಸಗಳು
ಕಳೆಯುವ ತನಕ ಅವರು ಮೋವಾಬಿನಲ್ಲಿದ್ದ
ಜೋರ್ಡನ್ ಕಣಿವೆಯಲ್ಲಿ ತಂಗಿದ್ದರು.

### ಯೆಹೋಶುವನು ಇಸ್ರೇಲರ ಹೊಸ ನಾಯಕ

9 ಮೋಶೆಯು ಯೆಹೋಶುವನ ಮೇಲೆ ತನ್ನ ಕೈಗಳ
ನ್ನಿಟ್ಟು ಅವನನ್ನು ನಾಯಕನನ್ನಾಗಿ ನೇಮಿಸಿದನು. ಆಗ
ನೂನನ ಮಗನಾದ ಯೆಹೋಶುವನು ಜ್ಞಾನದ ಆತ್ಮ
ನಿಂದ ತುಂಬಲ್ಪಟ್ಟವನಾದನು. ಇಸ್ರೇಲಿನ ಜನರು

ಯೆಹೋಶುವನಿಗೆ ವಿಧೇಯರಾದರು. ಯೆಹೋವನು ಮೋಶೆಗೆ ಆಜ್ಞಾಪಿಸಿದ್ದನ್ನೆಲ್ಲಾ ಇಸ್ರೇಲರು ಮಾಡಿದರು.

[10]ಮೋಶೆಯಂಥ ಪ್ರವಾದಿಯು ಇಸ್ರೇಲರಿಗೆ ದೊರೆಯಲೇ ಇಲ್ಲ. ಯೆಹೋವನು ಅವನೊಂದಿಗೆ ಮುಖಾಮುಖಿಯಾಗಿ ಮಾತನಾಡಿದನು. [11]ಈಜಿಪ್ಟ್ ದೇಶದಲ್ಲಿ ಅದ್ಭುತ ಕಾರ್ಯಗಳನ್ನು ಮಾಡುವುದಕ್ಕಾಗಿ ಯೆಹೋವನು ಮೋಶೆಯನ್ನು ಕಳುಹಿಸಿದನು. ಅದನ್ನು ಫರೋಹನೂ ಅವನ ಪರಿವಾರದವರೂ ಅಧಿಕಾರಿಗಳೆಲ್ಲರೂ ನೋಡಿದರು. [12]ಯಾವ ಪ್ರವಾದಿಯೂ ಮೋಶೆ ಮಾಡಿದ ಸೂಚಕಕಾರ್ಯಗಳನ್ನು ಮಾಡಲಿಲ್ಲ. ಇಸ್ರೇಲಿನ ಎಲ್ಲಾ ಜನರು ಮೋಶೆ ಮಾಡಿದ್ದನ್ನು ನೋಡಿದ್ದರು.

# ಯೆಹೋಶುವನು

### ದೇವರು ಯೆಹೋಶುವನನ್ನು ಇಸ್ರೇಲರ ನಾಯಕನನ್ನಾಗಿ ಆರಿಸಿದನು

1 ಮೋಶೆಯು ಯೆಹೋವನ ಸೇವಕನಾಗಿದ್ದನು.
ನೂನನ ಮಗನಾದ ಯೆಹೋಶುವನು ಮೋಶೆಯ
ಸಹಾಯಕನಾಗಿದ್ದನು. ಮೋಶೆಯ ಮರಣಾನಂತರ
ಯೆಹೋವನು ಯೆಹೋಶುವನೊಡನೆ ಮಾತನಾಡಿ,
2 ‘‘ನನ್ನ ಸೇವಕನಾದ ಮೋಶೆಯು ಸತ್ತನು. ಈಗ ನೀನು
ಮತ್ತು ಈ ಜನರು ಜೋರ್ಡನ್ ನದಿಯನ್ನು ದಾಟಿ
ಹೋಗಬೇಕು. ಇಸ್ರೇಲಿನ ಜನರಾದ ನಿಮಗೆ ನಾನು
ಕೊಡಲಿರುವ ದೇಶಕ್ಕೆ ನೀವು ಹೋಗಬೇಕು. 3 ನಾನು ಆ
ದೇಶವನ್ನು ನಿಮಗೆ ಕೊಡುವುದಾಗಿ ಮೋಶೆಗೆ ವಾಗ್ದಾನ
ಮಾಡಿದ್ದೇನೆ. ಆದ್ದರಿಂದ ನೀವು ಕಾಲಿಡುವ ಪ್ರದೇಶವ
ನ್ನೆಲ್ಲ ನಿಮಗೆ ಕೊಡುತ್ತೇನೆ. 4 ಅರಣ್ಯ ಮತ್ತು ಲೆಬನೋನ್
ಪರ್ವತ ಇವುಗಳನ್ನು ಮೊದಲುಗೊಂಡು ಯೂಫ್ರೇ
ಟೀಸ್ ಮಹಾನದಿಯವರೆಗಿರುವ ಹಿತ್ತಿಯರ ಪ್ರದೇಶ
ವೆಲ್ಲ ನಿಮ್ಮದಾಗುವುದು. ನಿಮ್ಮ ಪ್ರದೇಶವು ಪಶ್ಚಿಮದ
ಲ್ಲಿನ ಮೆಡಿಟರೇನಿಯನ್ ಸಮುದ್ರದವರೆಗೆ ವಿಸ್ತರಿಸಿ
ಕೊಳ್ಳುವುದು. 5 ನಾನು ಮೋಶೆಯ ಸಂಗಡ ಇದ್ದಂತೆ ನಿನ್ನ
ಸಂಗಡವೂ ಇರುತ್ತೇನೆ. ನಿನ್ನ ಜೀವಮಾನದಲ್ಲಿ
ಯಾವನೂ ನಿನ್ನನ್ನು ತಡೆಯಲಾರನು. ನಾನು ನಿನ್ನನ್ನು
ಕೈಬಿಡುವುದಿಲ್ಲ; ತೊರೆದು ಬಿಡುವುದಿಲ್ಲ’’ ಎಂದು
ಹೇಳಿದನು.
6 ‘‘ಯೆಹೋಶುವನೇ, ನೀನು ಸ್ಥಿರಚಿತ್ತನಾಗಿರಬೇಕು;
ಧೈರ್ಯವಂತನಾಗಿರಬೇಕು; ಈ ಜನರು ತಮ್ಮ ದೇಶ
ವನ್ನು ಪಡೆಯುವುದಕ್ಕೆ ನೀನು ಇವರ ಮುಂದಾಳಾಗಿ
ನಡೆಸಬೇಕು. ನಾನು ಇವರಿಗೆ ಈ ಪ್ರದೇಶವನ್ನು ಕೊಡು
ವುದಾಗಿ ಇವರ ಪೂರ್ವಿಕರಿಗೆ ವಾಗ್ದಾನ ಮಾಡಿದ್ದೇನೆ.
7 ಆದರೆ ನೀನು ಇನ್ನೊಂದು ವಿಷಯದಲ್ಲಿ ಯೂ ಸ್ಥಿರ
ಚಿತ್ತನಾಗಿರಬೇಕು; ಧೈರ್ಯವಂತನಾಗಿರಬೇಕು. ನನ್ನ
ಸೇವಕನಾಗಿದ್ದ ಮೋಶೆಯು ನಿನಗೆ ಕೊಟ್ಟ ಆಜ್ಞೆಗಳನ್ನು
ನೀನು ನಿಶ್ಚಿತವಾಗಿ ಪಾಲಿಸಬೇಕು. ಅವನ ಧರ್ಮೋಪ
ದೇಶವನ್ನೆಲ್ಲ ಚಾಚೂತಪ್ಪದೆ ಅನುಸರಿಸಿದ್ದೇ ಆದರೆ ನೀನು
ಮಾಡುವ ಎಲ್ಲ ಕಾರ್ಯಗಳಲ್ಲಿ ನಿನಗೆ ಜಯ ಸಿಗುವುದು
ಖಂಡಿತ. 8 ಆ ಧರ್ಮಗ್ರಂಥದಲ್ಲಿ ಬರೆದ ವಿಷಯಗಳನ್ನು
ಸದಾ ನೆನಪಿಡು. ಹಗಲೂ ರಾತ್ರಿ ಆ ಗ್ರಂಥವನ್ನು
ಧ್ಯಾನಿಸು. ಆಗ ಅದರಲ್ಲಿ ಬರೆದ ವಿಷಯಗಳಿಗೆ ನೀನು
ನಿಶ್ಚಿತವಾಗಿ ವಿಧೇಯನಾಗಿರುವೆ. ನೀನು ಹೀಗೆ ಮಾಡಿ
ದರೆ ನೀನು ಮಾಡುವ ಪ್ರತಿಯೊಂದು ಕಾರ್ಯದಲ್ಲಿ
ನೀನು ವಿವೇಕಶಾಲಿಯಾಗುವೆ ಮತ್ತು ಜಯಶಾಲಿ
ಯಾಗುವೆ. 9 ನೆನಪಿಡು, ನೀನು ಸ್ಥಿರಚಿತ್ತನಾಗಿರ
ಬೇಕೆಂತಲೂ ಧೈರ್ಯಶಾಲಿಯಾಗಿರಬೇಕೆಂತಲೂ
ನಾನು ನಿನಗೆ ಆಜ್ಞಾಪಿಸುತ್ತೇನೆ. ಆದ್ದರಿಂದ ಹೆದರಬೇಡ,
ಯಾಕಂದರೆ ನೀನು ಹೋದಲ್ಲೆಲ್ಲ ಯೆಹೋವನಾದ ನಿನ್ನ
ದೇವರೇ ನಿನ್ನ ಸಂಗಡ ಇರುವನು’’ ಎಂದು ಹೇಳಿದನು.

### ಯೆಹೋಶುವನು ಅಧಿಪತ್ಯವನ್ನು ವಹಿಸಿಕೊಂಡನು

10 ಯೆಹೋಶುವನು ಜನಾಧಿಪತಿಗಳಿಗೆ, 11 ‘‘ನೀವು
ಪಾಳೆಯದ ಎಲ್ಲಾ ಕಡೆಗೆ ಹೋಗಿ ಜನರಿಗೆ ಸಿದ್ದವಾಗಿರಲು
ತಿಳಿಸಿರಿ; ಸ್ವಲ್ಪ ಆಹಾರವನ್ನು ಸಿದ್ಧಪಡಿಸಿಕೊಳ್ಳಲು ಹೇಳಿರಿ.
ಇನ್ನು ಮೂರು ದಿವಸಗಳಲ್ಲಿ ನಾವು ಈ ಜೋರ್ಡನ್
ನದಿಯನ್ನು ದಾಟಿ ಹೋಗುವೆವು. ನಾವು ಹೋಗಿ
ಯೆಹೋವನಾದ ನಮ್ಮ ದೇವರು ನಮಗೆ ಕೊಡುವ ದೇಶ
ವನ್ನು ವಶಪಡಿಸಿಕೊಳ್ಳುವೆವು ಎಂದು ಹೇಳಿರಿ’’ ಎಂದು
ಆಜ್ಞಾಪಿಸಿದನು.
12 ಅನಂತರ ಯೆಹೋಶುವನು ರೂಬೇನ್ಯರ, ಗಾದ್ಯರ
ಮತ್ತು ಮನಸ್ಸೆಕುಲದ ಅರ್ಧಜನರ ಜೊತೆಗೆ ಮಾತನಾಡಿ
ಅವರಿಗೆ, 13 ‘‘ಯೆಹೋವನ ಸೇವಕನಾದ ಮೋಶೆಯು
ನಿಮಗೆ ಹೇಳಿದ್ದನ್ನು ನೆನಪು ಮಾಡಿಕೊಳ್ಳಿರಿ. ನಿಮ್ಮ
ದೇವರಾದ ಯೆಹೋವನು ವಿಶ್ರಾಂತಿಗಾಗಿ ಒಂದು ದೇಶ
ವನ್ನು ನಿಮಗೆ ಕೊಡುವುದಾಗಿ ವಾಗ್ದಾನ ಮಾಡಿದ್ದನು.
14 ಯೆಹೋವನು ಈಗಾಗಲೇ ಜೋರ್ಡನ್ ನದಿಯ
ಪೂರ್ವದ ಪ್ರದೇಶ ವನ್ನು ನಿಮಗೆ ಕೊಟ್ಟಿದ್ದಾನೆ. ನಿಮ್ಮ
ಹೆಂಡಂದಿರು, ಮಕ್ಕಳು ಮತ್ತು ನಿಮ್ಮ ದನಕುರಿಗಳು ಈ
ಪ್ರದೇಶದಲ್ಲಿಯೇ ಇರಬಹುದು. ಆದರೆ ನಿಮ್ಮ
ಯೋಧರು ನಿಮ್ಮ ಸಹೋದರರ ಸಂಗಡ ಜೋರ್ಡನ್
ನದಿಯನ್ನು ದಾಟಬೇಕು. ನೀವು ಯುದ್ಧಸನ್ನದ್ಧರಾಗಿ
ನಿಮ್ಮ ಸಹೋದರರಿಗೆ ಅವರ ದೇಶವನ್ನು ಪಡೆಯು

ವದರಲ್ಲಿ ಸಹಾಯ ಮಾಡಬೇಕು. 15ಯೆಹೋವನು
ನಿಮ್ಮ ವಿಶ್ರಾಂತಿಗಾಗಿ ಒಂದು ಸ್ಥಳವನ್ನು ಕೊಟ್ಟಿದ್ದಾನೆ.
ಯೆಹೋವನು ನಿಮ್ಮ ಸಹೋದರರಿಗಾಗಿಯೂ ಒಂದು
ಸ್ಥಳವನ್ನು ಕೊಡುತ್ತಾನೆ. ಆದರೆ ನಿಮ್ಮ ದೇವರಾದ
ಯೆಹೋವನು ಅವರಿಗೆ ಕೊಡುವ ದೇಶವನ್ನು ಅವರು
ಪಡೆದುಕೊಳ್ಳುವವರೆಗೆ ನೀವು ನಿಮ್ಮ ಸಹೋದರರಿಗೆ
ಸಹಾಯ ಮಾಡಬೇಕು. ಆಮೇಲೆ ನೀವು ಜೋರ್ಡನ್
ನದಿಯ ಪೂರ್ವದಿಕ್ಕಿನಲ್ಲಿರುವ ನಿಮ್ಮ ದೇಶಕ್ಕೆ ಹೋಗ
ಬಹುದು. ಯೆಹೋವನ ಸೇವಕನಾದ ಮೋಶೆಯು
ನಿಮಗೆ ಕೊಟ್ಟ ದೇಶವು ಅದೇ ಆಗಿದೆ'' ಎಂದನು.

16ಆಗ ಅವರು ಯೆಹೋಶುವನಿಗೆ, ''ನೀನು ಆಜ್ಞಾಪಿ
ಸಿದ್ದನ್ನೆಲ್ಲಾ ನಾವು ಮಾಡುತ್ತೇವೆ; ನೀನು ನಮ್ಮನ್ನು ಕಳಿಸಿ
ದ್ದಲ್ಲಿಗೆಲ್ಲ ಹೋಗುತ್ತೇವೆ. 17ನಾವು ಮೋಶೆಯ ಆಜ್ಞೆ
ಗಳನ್ನೆಲ್ಲಾ ಪಾಲಿಸಿದೆವು. ಅದೇ ರೀತಿ ನಿನ್ನ ಆಜ್ಞೆಗಳನ್ನೆಲ್ಲಾ
ಪಾಲಿಸುತ್ತೇವೆ. ನಿನ್ನ ದೇವರಾದ ಯೆಹೋವನು
ಮೋಶೆಯ ಸಂಗಡ ಇದ್ದ ಹಾಗೆ ನಿನ್ನ ಸಂಗಡವೂ ಇರಲಿ.
18ಯಾರಾದರೂ ನಿನ್ನ ಆಜ್ಞೆಗಳನ್ನು ಉಲ್ಲಂಘಿಸಿದರೆ
ಅಥವಾ ಯಾರಾದರೂ ನಿನ್ನನ್ನು ವಿರೋಧಿಸಿದರೆ ಅವ
ನನ್ನು ಕೊಲ್ಲಲಾಗುವುದು. ನೀನು ಮಾತ್ರ ಸ್ಥಿರಚಿತ್ತ
ನಾಗಿರು; ಧೈರ್ಯಶಾಲಿಯಾಗಿರು'' ಎಂದು ಹೇಳಿದರು.

### ಜೆರಿಕೋದಲ್ಲಿ ಗೂಢಚಾರರು

2 ನೂನನ ಮಗನಾದ ಯೆಹೋಶುವನು ಮತ್ತು
ಎಲ್ಲಾ ಜನರು ಆಕಾಶಿಯಾದಲ್ಲಿ* ಬಿಡಾರ ಮಾಡಿ
ದ್ದರು. ಯೆಹೋಶುವನು ಇಬ್ಬರು ಗೂಢಚಾರರನ್ನು
ಜೆರಿಕೋ ಪಟ್ಟಣದ ಬಗ್ಗೆ ತಿಳಿದುಕೊಳ್ಳಲು ಕಳುಹಿ
ಸಿದನು. ಈ ಜನರನ್ನು ಯೆಹೋಶುವನು ಕಳುಹಿಸಿದ
ಸಂಗತಿ ಬೇರೆ ಯಾರಿಗೂ ತಿಳಿದಿರಲಿಲ್ಲ. ''ಹೋಗಿ ಆ
ಜೆರಿಕೋ ನಗರವನ್ನು ಬಹಳ ಸೂಕ್ಷ್ಮವಾಗಿ ಪರೀಕ್ಷಿಸಿರಿ''
ಎಂದು ಯೆಹೋಶುವನು ಆ ಗೂಢಚಾರರಿಗೆ
ಹೇಳಿದ್ದನು. ಅವರಿಬ್ಬರು ಜೆರಿಕೋ ನಗರಕ್ಕೆ ಹೋಗಿ
ಒಬ್ಬ ವೇಶ್ಯೆಯ ಮನೆಯಲ್ಲಿ ಇಳಿದುಕೊಂಡರು. ಆ
ಹೆಂಗಸಿನ ಹೆಸರು 'ರಾಹಾಬ'.

2ಆಗ ಯಾರೋ ಒಬ್ಬರು ಜೆರಿಕೋ ನಗರದ ರಾಜ
ನಿಗೆ, ''ನಿನ್ನೆ ರಾತ್ರಿ ಇಸ್ರೇಲರ ಕಡೆಯ ಕೆಲವರು ನಮ್ಮ
ದೇಶದ ದೌರ್ಬಲ್ಯಗಳನ್ನು ಕಂಡುಹಿಡಿಯುವುದಕ್ಕಾಗಿ
ಬಂದಿದ್ದಾರೆ'' ಎಂದು ಹೇಳಿದರು.

3ಆಗ ಜೆರಿಕೋ ನಗರದ ಅರಸನು ರಾಹಾಬಳಿಗೆ, ''ನಿನ್ನ
ಮನೆಗೆ ಬಂದು ಇಳಿದುಕೊಂಡ ಆ ಜನರನ್ನು ಬಚ್ಚಿಡ
ಬೇಡ. ಅವರನ್ನು ಹೊರಗೆ ಕರೆದುಕೊಂಡು ಬಾ. ಅವರು
ನಮ್ಮ ದೇಶದ ಬಗ್ಗೆ ತಿಳಿದುಕೊಳ್ಳುವುದಕ್ಕೆ ಬಂದಿದ್ದಾರೆ''
ಎಂದು ಹೇಳಿ ಕಳುಹಿಸಿದನು.

4ರಾಹಾಬಳು ಈ ಇಬ್ಬರನ್ನು ಅಡಗಿಸಿಟ್ಟಿದ್ದಳು. ಆದರೆ
ಆಕೆಯು, ''ಇಬ್ಬರು ಮನುಷ್ಯರು ಇಲ್ಲಿಗೆ ಬಂದಿದ್ದರು,
ಆದರೆ ಅವರು ಎಲ್ಲಿಂದ ಬಂದಿದ್ದರೆಂಬುದು ನನಗೆ
ಗೊತ್ತಿರಲಿಲ್ಲ. 5ಸಾಯಂಕಾಲ ನಗರದ ದ್ವಾರವನ್ನು
ಮುಚ್ಚುವ ಸಮಯವಾದಾಗ ಅವರು ಹೊರಟು
ಹೋದರು. ಅವರು ಎಲ್ಲಿಗೆ ಹೋದರೆಂಬುದು ನನಗೆ
ತಿಳಿಯದು. ಆದರೂ ನೀವು ಬೇಗ ಹೋದರೆ ಅವರನ್ನು
ಹಿಡಿಯಬಹುದು'' ಎಂದಳು. 6ಆದರೆ ಅವಳು ನಿಜವಾಗಿ
ಆ ಗೂಢಚಾರರನ್ನು ಮಾಳಿಗೆಯ* ಮೇಲೆ ಕರೆದು
ಕೊಂಡು ಹೋಗಿ ಒಟ್ಟಿದ ಹುಲ್ಲಿನಲ್ಲಿ ಅವರನ್ನು
ಮುಚ್ಚಿಟ್ಟಿದ್ದಳು.

7ರಾಜಭಟರು ನಗರದ ಹೊರಗೆ ಹೋಗಿ ನಗರದ
ದ್ವಾರಗಳನ್ನು ಮುಚ್ಚಿ ಇಸ್ರೇಲಿನಿಂದ ಬಂದ ಆ ಇಬ್ಬರನ್ನು
ಹುಡುಕಿಕೊಂಡು ಹೋದರು. ಅವರು ಜೋರ್ಡನ್ ನದಿ
ಯವರೆಗೆ ಹೋಗಿ ಜನರು ನದಿದಾಟುವ ಎಲ್ಲ ಸ್ಥಳಗಳಲ್ಲಿ
ಹುಡುಕಿದರು.

8ಆ ಇಬ್ಬರು ಗೂಢಚಾರರು ಆ ರಾತ್ರಿ ಅಲ್ಲಿಯೇ ಮಲ
ಗಲು ಸಿದ್ಧತೆ ಮಾಡಿಕೊಂಡಿದ್ದರು. ಆದರೆ ರಾಹಾಬಳು
ಮಾಳಿಗೆಯ ಮೇಲೆ ಹೋಗಿ ಅವರೊಂದಿಗೆ ಮಾತನಾಡಿ,
9''ಯೆಹೋವನು ಈ ದೇಶವನ್ನು ನಿಮ್ಮ ಜನರಿಗೆ ಕೊಟ್ಟಿ
ದ್ದಾನೆಂದು ನಾನು ಬಲ್ಲೆ. ನಿಮ್ಮ ವಿಷಯ ಕೇಳಿ ನಮಗೆ
ಭಯ ಉಂಟಾಗಿದೆ. ಈ ದೇಶದಲ್ಲಿರುವ ಎಲ್ಲಾ ಜನರು
ನಿಮ್ಮಿಂದ ಭಯಭೀತರಾಗಿದ್ದಾರೆ. 10ಯೆಹೋವನು
ನಿಮಗೆ ಸಹಾಯ ಮಾಡಿದ ರೀತಿಯ ಬಗ್ಗೆ ನಾವು ಕೇಳಿ
ಭಯಗೊಂಡಿದ್ದೇವೆ. ನೀವು ಈಜಿಪ್ಟಿನಿಂದ ಹೊರಬಂದ
ಮೇಲೆ ಆತನು ಕೆಂಪುಸಮುದ್ರದ ನೀರನ್ನು ಬತ್ತಿಸಿದ್ದನ್ನು
ನಾವು ಕೇಳಿದ್ದೇವೆ. ಜೋರ್ಡನ್ ನದಿಯ ಪೂರ್ವಕ್ಕಿದ್ದ
ಸೀಹೋನ್ ಮತ್ತು ಓಗ್ ಎಂಬ ಅಮೋರಿಯರ ಅರಸ
ರಿಬ್ಬರನ್ನು ನೀವು ಹೇಗೆ ನಾಶಮಾಡಿದಿರೆಂಬುದನ್ನೂ
ಕೇಳಿದ್ದೇವೆ. 11ಇವೆಲ್ಲವುಗಳ ಬಗ್ಗೆ ಕೇಳಿ ನಮಗೆ ಅತೀವ
ಭಯವಾಗಿದೆ; ನಮ್ಮಲ್ಲಿ ಯಾರಿಗೂ ನಿಮ್ಮೊಂದಿಗೆ ಯುದ್ಧ
ಮಾಡಲು ಧೈರ್ಯವಿಲ್ಲ. ಏಕೆಂದರೆ ನಿಮ್ಮ ದೇವರಾದ
ಯೆಹೋವನು, ಭೂಪರಲೋಕಗಳನ್ನು ಆಳುವವನಾಗಿ
ದ್ದಾನೆ. 12ಈಗ ನೀವು ನನಗೊಂದು ಪ್ರಮಾಣ
ಮಾಡಬೇಕು. ನಾನು ನಿಮಗೆ ದಯೆತೋರಿ ಸಹಾಯ
ಮಾಡಿದೆ. ಆದುದರಿಂದ ನೀವು ಸಹ ನನ್ನ ಕುಟುಂಬದ
ವರಿಗೆ ದಯೆತೋರುವಿರೆಂಬುದಕ್ಕೆ ಒಂದು ಗುರುತನ್ನು
ಕೊಡಿರಿ. 13ನನ್ನ ಕುಟುಂಬದವರನ್ನು ಅಂದರೆ ನನ್ನ ತಂದೆ
ತಾಯಿಗಳನ್ನು, ಸಹೋದರ ಸಹೋದರಿಯರನ್ನು,
ಮತ್ತು ಅವರೆಲ್ಲರ ಕುಟುಂಬ ವರ್ಗದವರನ್ನು

**ಆಕಾಶಿಯಾ** ಅಥವಾ ''ಶಿಟ್ಟೀಮ್,'' ಜೋರ್ಡನ್ ನದಿಯ ಪೂರ್ವದಿಕ್ಕಿನಲ್ಲಿರುವ ಒಂದು ಊರು.

**ಮಾಳಿಗೆ** ಇಸ್ರೇಲಿನಲ್ಲಿ ಮಾಳಿಗೆಗಳು ಸಮತಲವಾಗಿರುತ್ತಿದ್ದವು. ಜನರು ಪದಾರ್ಥಗಳನ್ನು ಇಡಲು ಅವುಗಳನ್ನು ಉಪಯೋಗಿಸುತ್ತಿದ್ದರು.

ಜೀವಂತವಾಗಿ ಉಳಿಸುವುದಾಗಿ ಪ್ರಮಾಣ ಮಾಡಿರಿ''
ಎಂದು ಹೇಳಿದಳು.
14ಅದಕ್ಕೆ ಅವರು ''ನಮ್ಮ ಪ್ರಾಣವನ್ನಾದರೂ ಕೊಟ್ಟು
ನಿಮ್ಮ ಪ್ರಾಣ ಉಳಿಸುತ್ತೇವೆ. ಆದರೆ ನೀವು ಇದನ್ನು
ಯಾರಿಗೂ ಹೇಳಬೇಡಿ. ಯೆಹೋವನು ಈ ದೇಶವನ್ನು
ನಮಗೆ ಅನುಗ್ರಹಿಸಿದ ಮೇಲೆ ನಾವು ನಿಮಗೆ ದಯೆ
ತೋರುತ್ತೇವೆ. ನೀನು ನಮ್ಮನ್ನು ನಂಬಬಹುದು''
ಎಂದರು.
15ರಾಹಾಬಳ ಮನೆಯನ್ನು ಊರಗೋಡೆಗೆ ಸೇರಿಸಿ
ಕಟ್ಟಲಾಗಿತ್ತು, ಆದುದರಿಂದ ಅವರನ್ನು ಒಂದು ಹಗ್ಗದ
ಮೂಲಕ ಕಿಟಕಿಯಿಂದ ಕೆಳಕ್ಕೆ ಇಳಿಸಿದಳು. 16ಆಕೆ
ಅವರಿಗೆ, ''ನೀವು ಪಶ್ಚಿಮ ದಿಕ್ಕಿನ ಕಡೆಗೆ ಹೋಗಿ ಬೆಟ್ಟ
ಗಳಲ್ಲಿ ಅಡಗಿಕೊಳ್ಳಿರಿ; ಆಗ ರಾಜಭಟರು ನಿಮ್ಮನ್ನು
ಕಂಡುಹಿಡಿಯಲಾರರು; ಅಲ್ಲಿ ಮೂರು ದಿನಗಳವರೆಗೆ
ಅಡಗಿಕೊಂಡಿದ್ದು ರಾಜಭಟರು ಹಿಂದಿರುಗಿದ ಮೇಲೆ
ನೀವು ನಿಮ್ಮ ಸ್ಥಳಕ್ಕೆ ಹೋಗಬಹುದು'' ಎಂದು
ಹೇಳಿದಳು.
17ಅವರು ಅವಳಿಗೆ,''ನಾವು ನಿನಗೊಂದು ಪ್ರಮಾಣ
ಮಾಡಿದ್ದೇವೆ; ಆದರೆ ನೀನು ಒಂದು ಕೆಲಸ ಮಾಡಬೇಕು.
ಇಲ್ಲವಾದರೆ ನಾವು ನಮ್ಮ ಪ್ರಮಾಣಕ್ಕೆ ಹೊಣೆಗಾರ
ರಾಗುವುದಿಲ್ಲ. 18ನಮ್ಮನ್ನು ಇಳಿಸುವುದಕ್ಕಾಗಿ ನೀನು
ಉಪಯೋಗಿಸಿದ ಈ ಕೆಂಪು ಹಗ್ಗವನ್ನು ನಾವು ಈ ದೇಶಕ್ಕೆ
ಹಿಂತಿರುಗಿ ಬರುವಾಗ ನೀನು ಕಿಟಕಿಗೆ ಕಟ್ಟಿರಬೇಕು. ನಿನ್ನ
ತಂದೆತಾಯಿಗಳು, ನಿನ್ನ ಸಹೋದರ ಸಹೋದರಿಯರು
ಮತ್ತು ನಿನ್ನ ಕುಟುಂಬ ವರ್ಗದವರು ನಿನ್ನ ಸಂಗಡ ಈ
ಮನೆಯಲ್ಲಿರಬೇಕು.
19ಈ ಮನೆಯಲ್ಲಿರುವ ಪ್ರತಿಯೊಬ್ಬರನ್ನು ನಾವು
ಕಾಪಾಡುತ್ತೇವೆ. ನಿನ್ನ ಮನೆಯಲ್ಲಿ ಯಾರಿಗಾದರು
ಪೆಟ್ಟಾದರೆ ಅದಕ್ಕೆ ನಾವು ಹೊಣೆಗಾರರಾಗುವೆವು. ಆದರೆ
ಯಾರಾದರೂ ನಿನ್ನ ಮನೆಯಿಂದ ಹೊರಗೆ ಹೋದಾಗ
ಕೊಲ್ಲಲ್ಪಟ್ಟರೆ ಅದಕ್ಕೆ ನಾವು ಹೊಣೆಗಾರರಲ್ಲ; ಅದಕ್ಕೆ
ಅವರೇ ಹೊಣೆಗಾರರು. 20ನಾವು ನಿನಗೆ ಈ
ಪ್ರಮಾಣವನ್ನು ಮಾಡಿದ್ದೇವೆ. ಆದರೆ ಇದನ್ನು ನೀನು
ಯಾರಿಗೂ ಹೇಳಕೂಡದು; ಒಂದುವೇಳೆ ಹೇಳಿದರೆ,
ನಾವು ಈ ಪ್ರಮಾಣದಿಂದ ಮುಕ್ತರಾಗುತ್ತೇವೆ'' ಎಂದು
ಹೇಳಿದರು.
21ಅದಕ್ಕೆ ಅವಳು, ''ಹಾಗೇ ಆಗಲಿ'' ಎಂದು ಹೇಳಿ ಅವ
ರನ್ನು ಕಳುಹಿಸಿಕೊಟ್ಟಳು. ಆ ಜನರು ಅವಳ ಮನೆಯಿಂದ
ಹೊರಟರು. ಆಗ ಆ ಹೆಂಗಸು ಆ ಕೆಂಪು ಹಗ್ಗವನ್ನು ಕಿಟಕಿಗೆ
ಕಟ್ಟಿದಳು.
22ಅವರು ಅವಳ ಮನೆಯಿಂದ ಹೋಗಿ ಬೆಟ್ಟಗಳಲ್ಲಿ
ಅಡಗಿಕೊಂಡು ಮೂರು ದಿನಗಳವರೆಗೆ ಅಲ್ಲೇ ಇದ್ದರು.
ರಾಜಭಟರು ದಾರಿಯಲ್ಲೆಲ್ಲಾ ಹುಡುಕಾಡಿ ಮೂರು
ದಿನಗಳ ತರುವಾಯ ಪಟ್ಟಣಕ್ಕೆ ಹಿಂದಿರುಗಿದರು. 23ಆಗ
ಇವರಿಬ್ಬರು ಬೆಟ್ಟದಿಂದಿಳಿದು ನದಿಯನ್ನು ದಾಟಿ
ಯೆಹೋಶುವನ ಬಳಿಗೆ ಹೋಗಿ ತಾವು ತಿಳಿದುಕೊಂಡ
ಎಲ್ಲವನ್ನು ತಿಳಿಸಿದರು. ಅವರು ಯೆಹೋಶುವನಿಗೆ,
24''ಯೆಹೋವನು ನಿಜವಾಗಿಯೂ ಆ ದೇಶವನ್ನೆಲ್ಲಾ
ನಮಗೆ ದಯಪಾಲಿಸಿದ್ದಾನೆ. ಆ ದೇಶದ ಎಲ್ಲ ಜನರು
ನಮ್ಮಿಂದ ಭಯಗೊಂಡಿದ್ದಾರೆ'' ಎಂದು ತಿಳಿಸಿದರು.

## ಜೋರ್ಡನ್ ನದಿಯಲ್ಲಿ ಅದ್ಭುತಕಾರ್ಯ

3 ಮರುದಿನ ಬೆಳಗಿನ ಜಾವದಲ್ಲಿ ಯೆಹೋಶುವನು
ಮತ್ತು ಎಲ್ಲಾ ಇಸ್ರೇಲರು ಎದ್ದು ಆಕಾಶಿಯದಿಂದ*
ಹೊರಟು ಜೋರ್ಡನ್ ನದಿಯವರೆಗೆ ಬಂದರು.
ಅವರು ಜೋರ್ಡನ್ ನದಿಯನ್ನು ದಾಟುವ ಮೊದಲು
ಅಲ್ಲಿ ಪಾಳೆಯ ಮಾಡಿಕೊಂಡರು. 2ಮೂರು ದಿನಗಳ
ತರುವಾಯ ಜನನಾಯಕರು ಪಾಳೆಯದ ಎಲ್ಲ ಕಡೆಗೂ
ಹೋಗಿ ಜನರಿಗೆ, 3''ಯಾಜಕರು ಮತ್ತು ಲೇವಿಯರು*
ನಿಮ್ಮ ದೇವರಾದ ಯೆಹೋವನ ಒಡಂಬಡಿಕೆಯ ಪೆಟ್ಟಿಗೆ
ಯನ್ನು* ಹೊತ್ತುಕೊಂಡು ಹೋಗುವುದನ್ನು ನೀವು
ಕಾಣುವಾಗ ಅವರನ್ನು ಹಿಂಬಾಲಿಸಿರಿ. 4ನಿಮಗೂ ಒಡಂ
ಬಡಿಕೆಯ ಪೆಟ್ಟಿಗೆಗೂ ಮೂರು ಸಾವಿರ ಅಡಿ ಅಂತರ
ವಿರಲಿ. ಅದರ ಸಮೀಪ ನೀವು ಹೋಗಕೂಡದು. ಈ
ದಾರಿಯಲ್ಲಿ ನೀವು ಹಿಂದೆಂದೂ ಪ್ರಯಾಣ ಮಾಡಿಲ್ಲ.
ಆದರೆ ನೀವು ಅವರನ್ನು ಹಿಂಬಾಲಿಸಿದರೆ ಎಲ್ಲಿಗೆ ಹೋಗ
ಬೇಕೆಂದು ನಿಮಗೆ ತಿಳಿಯುತ್ತದೆ'' ಎಂದು ಸಾರಿದರು.
5''ನಿಮ್ಮನ್ನು ನೀವು ಶುದ್ಧೀಕರಿಸಿಕೊಳ್ಳಿರಿ. ನಾಳೆ ನಿಮ್ಮ
ದೇವರಾದ ಯೆಹೋವನು ಅದ್ಭುತಗಳನ್ನು ನಿಮ್ಮ ಮಧ್ಯ
ದಲ್ಲಿ ಮಾಡುತ್ತಾನೆ'' ಎಂದು ಯೆಹೋಶುವನು ಜನರಿಗೆ
ತಿಳಿಸಿದನು.
6ಬಳಿಕ ಯೆಹೋಶುವನು ಯಾಜಕರಿಗೆ, ''ಒಡಂಬಡಿ
ಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡು ಜನಗಳ ಮುಂದೆ
ನದಿಯ ಕಡೆಗೆ ನಡೆಯಿರಿ'' ಎಂದನು. ಯಾಜಕರು ಪೆಟ್ಟಿಗೆ
ಯನ್ನು ಹೊತ್ತುಕೊಂಡು ಜನರ ಮುಂದೆ ನಡೆದರು.
7ಆಗ ಯೆಹೋವನು ಯೆಹೋಶುವನಿಗೆ, ''ನಾನು
ನಿನ್ನನ್ನು ಇಂದಿನಿಂದ ಎಲ್ಲಾ ಇಸ್ರೇಲರ ಮುಂದೆ

**ಆಕಾಶಿಯಾ** ಅಥವಾ ''ಶಿಟ್ಟೀಮ್,'' ಜೋರ್ಡನ್ ನದಿಯ ಪೂರ್ವದಿಕ್ಕಿನಲ್ಲಿರುವ ಒಂದು ಊರು.

**ಲೇವಿಯರು** ಲೇವಿಕುಲದ ಜನರು. ಈ ಲೇವಿಯರು ದೇವಾಲಯದಲ್ಲಿ ಯಾಜಕರಿಗೆ ಸಹಾಯ ಮಾಡುತ್ತಿದ್ದರು ಮತ್ತು ಪ್ರಜಾ ಸರ್ಕಾರದ ಪರವಾಗಿ ಕೆಲಸ ಮಾಡುತ್ತಿದ್ದರು.

**ಒಡಂಬಡಿಕೆಯ ಪೆಟ್ಟಿಗೆ** ಇಸ್ರೇಲರು ಸೀನಾಯ್ ಮರುಭೂಮಿಯಲ್ಲಿ ಇದ್ದಾಗ ಅವರೊಂದಿಗೆ ದೇವರಿದ್ದಾನೆಂದು ತೋರಿಸಿ ಕೊಡುವ ದೈವಾಜ್ಞೆಗಳನ್ನು ಕೆತ್ತಲ್ಪಟ್ಟ ಚಪ್ಪಟವಾದ ಕಲ್ಲುಗಳು ಮತ್ತು ಇತರ ಪದಾರ್ಥಗಳನ್ನು ಹೊಂದಿದ ಪೆಟ್ಟಿಗೆ.

ಘನವಂತನನ್ನಾಗಿ ಮಾಡುವೆನು. ನಾನು ಮುಂಚೆ
ಮೋಶೆಯ ಸಂಗಡ ಇದ್ದಂತೆಯೇ ನಿನ್ನ ಸಂಗಡವೂ
ಇದ್ದೇನೆಂಬುದು ಆಗ ಜನರಿಗೆ ತಿಳಿಯುತ್ತದೆ. 8ಒಡಂಬಡಿ
ಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡು ಹೋಗುತ್ತಿರುವ
ಯಾಜಕರಿಗೆ, ''ನೀವು ಜೋರ್ಡನ್ ನದಿಯ ತೀರಕ್ಕೆ
ಹೋಗಿ, ನೀರಿನೊಳಗೆ ಕಾಲಿಡದೆ ಅದರ ಅಂಚಿನಲ್ಲೇ
ನಿಂತುಕೊಳ್ಳಿರಿ' ಎಂದು ಹೇಳು'' ಅಂದನು.

9ಆಗ ಯೆಹೋಶುವನು ಇಸ್ರೇಲರಿಗೆ ''ಇಲ್ಲಿ ಬನ್ನಿರಿ;
ನಿಮ್ಮ ದೇವರಾದ ಯೆಹೋವನ ಮಾತುಗಳನ್ನು ಕೇಳಿರಿ.
10ಚೈತನ್ಯಸ್ವರೂಪನಾದ ದೇವರು ನಿಜವಾಗಿಯೂ ನಿಮ್ಮ
ಸಂಗಡ ಇದ್ದಾನೆ ಎಂಬುದಕ್ಕೆ ಇಲ್ಲಿ ಒಂದು ಸಾಕ್ಷಿ ಇದೆ.
ಅವನು ನಿಜವಾಗಿಯೂ ನಿಮ್ಮ ವೈರಿಗಳನ್ನು ಸೋಲಿಸು
ತ್ತಾನೆ ಎಂಬುದಕ್ಕೆ ಇಲ್ಲಿ ಸಾಕ್ಷಿ ಇದೆ. ಕಾನಾನ್ಯರು, ಹಿತ್ತಿ
ಯರು, ಹಿವ್ವಿಯರು, ಪೆರಿಜೀಯರು, ಗಿರ್ಗಾಷಿಯರು,
ಅಮೋರಿಯರು, ಯೆಬೂಸಿಯರು, ಇವರನ್ನೆಲ್ಲ ಆತನು
ಸೋಲಿಸುತ್ತಾನೆ. ಆ ದೇಶದಿಂದ ಅವರನ್ನು ಬಲವಂತ
ವಾಗಿ ಹೊರಗಟ್ಟುತ್ತಾನೆ. 11ಇದೋ ಇಲ್ಲಿದೆ ಸಾಕ್ಷಿ. ನೀವು
ಜೋರ್ಡನ್ ನದಿಯನ್ನು ದಾಟುವಾಗ ಸರ್ವಲೋಕದ
ಒಡೆಯನಾದ ಯೆಹೋವನ ಒಡಂಬಡಿಕೆಯ ಪೆಟ್ಟಿ
ಗೆಯು ನಿಮ್ಮ ಮುಂದೆ ಹೋಗುವುದು. 12ಈಗ ಹನ್ನೆರಡು
ಜನರನ್ನು ಆರಿಸಿರಿ. ಇಸ್ರೇಲರ ಕುಲಗಳಿಂದ ಪ್ರತಿಕುಲಕ್ಕೆ
ಒಬ್ಬನಂತೆ ಹನ್ನೆರಡು ಮಂದಿಯನ್ನು ಆರಿಸಿಕೊಳ್ಳಿರಿ.
13ಯಾಜಕರು ಯೆಹೋವನ ಪೆಟ್ಟಿಗೆಯನ್ನು ಹೊತ್ತು
ಕೊಂಡು ಹೋಗುವರು. ಯೆಹೋವನು ಸರ್ವಲೋಕದ
ಒಡೆಯನಾಗಿದ್ದಾನೆ. ಅವರು ಆ ಪೆಟ್ಟಿಗೆಯನ್ನು ನಿಮ್ಮ
ಮುಂದೆ ಜೋರ್ಡನ್ ನದಿಯಲ್ಲಿ ತೆಗೆದುಕೊಂಡು
ಹೋಗುವರು. ಅವರು ನೀರಿನಲ್ಲಿ ಪ್ರವೇಶ ಮಾಡಿದಾಗ
ಜೋರ್ಡನ್ ನದಿಯ ನೀರು ಹರಿಯದೆ ನಿಂತು
ಬಿಡುವುದು. ನೀರು ಮುಂದಕ್ಕೆ ಹರಿಯದೆ ಹರಡಿ
ಕೊಂಡು ಸರೋವರದಂತೆ ತೋರುವುದು'' ಎಂದು
ತಿಳಿಸಿದನು.

14ಯಾಜಕರು ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತು
ಕೊಂಡು ನಡೆದರು. ಜನರು ತಾವು ಪಾಳೆಯ ಮಾಡಿ
ಕೊಂಡಿದ್ದ ಸ್ಥಳದಿಂದ ಹೊರಟು ಜೋರ್ಡನ್ ನದಿಯ
ಕಡೆಗೆ ಹೋದರು. 15(ಆಗ ಸುಗ್ಗಿಯ ಕಾಲವಾದ್ದರಿಂದ
ಜೋರ್ಡನ್ ನದಿಯು ದಡಮೀರಿ ಹರಿಯುತ್ತಿತ್ತು.)
ಪೆಟ್ಟಿಗೆಯನ್ನು ಹೊತ್ತುಕೊಂಡು ಹೋಗುತ್ತಿದ್ದ ಯಾಜ
ಕರು ನದಿಯ ತೀರಕ್ಕೆ ಬಂದರು. ಅವರು ನೀರಿನಲ್ಲಿ ಹೆಜ್ಜೆ
ಇಟ್ಟರು. 16ಆಗ ನೀರು ಹರಿಯದೆ ನಿಂತುಬಿಟ್ಟಿತು. ಆ
ಸ್ಥಳದ ಹಿಂಭಾಗದಲ್ಲಿ ಒಂದು ಸರೋವರದಂತೆ ನೀರು
ತುಂಬಿಕೊಂಡಿತು. ನೀರು ಬಹು ದೂರದಲ್ಲಿರುವ
ಆದಾಮ್ ಊರಿನವರಿಗೂ (ಜಾರೆತಾನಿನ ಹತ್ತಿರ ಇರುವ
ಒಂದು ಊರು) ರಾಶಿರಾಶಿಯಾಗಿ ನಿಂತುಕೊಂಡಿತು.
ಜನರು ಜೆರಿಕೋವಿನ ಹತ್ತಿರ ನದಿಯನ್ನು ದಾಟಿದರು.
17ಆ ಸ್ಥಳದಲ್ಲಿ ನೆಲವು ಒಣಗಿತ್ತು; ಯಾಜಕರು
ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು ನದಿಯ
ಮಧ್ಯದವರೆಗೆ ತೆಗೆದುಕೊಂಡು ಹೋಗಿ ಅಲ್ಲಿ ನಿಂತು
ಕೊಂಡರು. ಯಾಜಕರು ಅಲ್ಲಿಯೇ ನಿಂತುಕೊಂಡಿರ
ಲಾಗಿ ಎಲ್ಲಾ ಇಸ್ರೇಲರು ಒಣ ನೆಲದ ಮೇಲೆ ನಡೆದು
ಕೊಂಡು ಹೋಗಿ ಜೋರ್ಡನ್ ನದಿಯನ್ನು ದಾಟಿದರು.

### ಜನರಿಗೆ ನೆನಪನ್ನು ತರುವ ಕಲ್ಲುಗಳು

4 ಜನರೆಲ್ಲರೂ ಜೋರ್ಡನ್ ನದಿಯನ್ನು ದಾಟಿ
ದರು. ಆಗ ಯೆಹೋವನು ಯೆಹೋಶುವನಿಗೆ,
2''ಪ್ರತಿಯೊಂದು ಕುಲದಿಂದ ಒಬ್ಬನಂತೆ ಹನ್ನೆರಡು
ಮಂದಿಯನ್ನು ಆರಿಸು. 3ನದಿಯಲ್ಲಿ ಯಾಜಕರು ನಿಂತು
ಕೊಂಡಿದ್ದ ಸ್ಥಳದಿಂದ ಹನ್ನೆರಡು ಕಲ್ಲುಗಳನ್ನು ಹುಡುಕಿ
ತೆಗೆದುಕೊಂಡು ಬರುವುದಕ್ಕೆ ಅವರಿಗೆ ಹೇಳು. ನೀವು ಈ
ರಾತ್ರಿ ಇಳಿದುಕೊಳ್ಳುವ ಸ್ಥಳದಲ್ಲಿ ಆ ಕಲ್ಲುಗಳನ್ನು
ನಿಲ್ಲಿಸಿರಿ'' ಎಂದು ಹೇಳಿದನು.

4ಆದುದರಿಂದ ಯೆಹೋಶುವನು ಪ್ರತಿಯೊಂದು ಕುಲ
ದಿಂದ ಒಬ್ಬೊಬ್ಬನನ್ನು ಆರಿಸಿದನು. ಆಮೇಲೆ ಆ ಹನ್ನೆ
ರಡು ಜನರನ್ನು ಒಟ್ಟಿಗೆ ಕರೆದು ಅವರಿಗೆ, 5''ನದಿಯಲ್ಲಿ
ನಿಮ್ಮ ದೇವರಾದ ಯೆಹೋವನ ಪವಿತ್ರ ಪೆಟ್ಟಿಗೆ ಇರುವ
ಸ್ಥಳಕ್ಕೆ ಹೋಗಿ ನಿಮ್ಮಲ್ಲಿ ಪ್ರತಿಯೊಬ್ಬರೂ ಒಂದೊಂದು
ಕಲ್ಲನ್ನು ಹೆಗಲ ಮೇಲೆ ಹೊತ್ತುಕೊಂಡು ಬನ್ನಿರಿ. 6ಈ
ಕಲ್ಲುಗಳು ನಿಮ್ಮ ಮಧ್ಯದಲ್ಲಿ ಗುರುತಾಗಿರುವವು.
ಮುಂದಿನ ಕಾಲದಲ್ಲಿ ನಿಮ್ಮ ಮಕ್ಕಳು ನಿಮ್ಮನ್ನು, ''ಈ
ಕಲ್ಲುಗಳು ಏನು ಸೂಚಿಸುತ್ತವೆ?''ಎಂದು ಕೇಳುತ್ತಾರೆ.
7ಅದಕ್ಕೆ ನೀವು, 'ಯೆಹೋವನ ಒಡಂಬಡಿಕೆಯ ಪೆಟ್ಟಿ
ಗೆಯು ಜೋರ್ಡನ್ ನದಿಯನ್ನು ದಾಟುತ್ತಿರುವಾಗ ಹರಿ
ಯುವ ನೀರು ನಿಂತುಹೋಯಿತು 'ಎಂದು ಹೇಳಿರಿ. ಆ
ಕಲ್ಲುಗಳು ಇಸ್ರೇಲರಿಗೆ ಸದಾಕಾಲ ಸಾಕ್ಷಿಗಳಾಗಿರುತ್ತವೆ''
ಎಂದು ಹೇಳಿದನು.

8ಇಸ್ರೇಲರು ಯೆಹೋಶುವನ ಆಜ್ಞೆಯಂತೆ
ಜೋರ್ಡನ್ ನದಿಯ ಮಧ್ಯಭಾಗದಿಂದ ಹನ್ನೆರಡು ಕಲ್ಲು
ಗಳನ್ನು ತೆಗೆದುಕೊಂಡು ಬಂದರು. ಇಸ್ರೇಲಿನ ಹನ್ನೆರಡು
ಕುಲಗಳಿಗೆ ಸರಿಯಾಗಿ ಹನ್ನೆರಡು ಕಲ್ಲುಗಳಿದ್ದವು.
ಯೆಹೋವನು ಯೆಹೋಶುವನಿಗೆ ಹೇಳಿದಂತೆಯೇ
ಅವರು ಕಲ್ಲುಗಳನ್ನು ತಮ್ಮ ಸಂಗಡ ತೆಗೆದುಕೊಂಡು
ಬಂದು ತಾವು ಇಳಿದುಕೊಂಡಿದ್ದ ಸ್ಥಳದಲ್ಲಿ ಆ ಕಲ್ಲುಗಳನ್ನು
ಇಟ್ಟರು. 9(ಇದಲ್ಲದೆ ಯೆಹೋಶುವನು ಹನ್ನೆರಡು ಕಲ್ಲು
ಗಳನ್ನು ಜೋರ್ಡನ್ ನದಿಯ ಮಧ್ಯದಲ್ಲಿ ಅಂದರೆ
ಯೆಹೋವನ ಪವಿತ್ರ ಪೆಟ್ಟಿಗೆಯನ್ನು ತೆಗೆದುಕೊಂಡು
ಹೋಗುವಾಗ ಯಾಜಕರು ನಿಂತಿದ್ದ ಸ್ಥಳದಲ್ಲಿ ಇಟ್ಟನು.
ಆ ಕಲ್ಲುಗಳು ಇಂದಿಗೂ ಆ ಸ್ಥಳದಲ್ಲಿವೆ.)

10ಮೋಶೆಯು ಆಜ್ಞಾಪಿಸಿದಂತೆ ಯೆಹೋಶುವನು
ಜನರಿಗೆ ತಿಳಿಸಿದ ಯೆಹೋವನ ಅಪ್ಪಣೆಗಳನ್ನೆಲ್ಲ ಅವರು
ಕೈಗೊಳ್ಳುವವರೆಗೆ ಪವಿತ್ರ ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋಗುತ್ತಿದ್ದ ಯಾಜಕರು ನದಿಯ ಮಧ್ಯದಲ್ಲಿ
ನಿಂತುಕೊಂಡೇ ಇದ್ದರು. ಜನರು ತ್ವರಿತಗತಿಯಿಂದ
ನದಿಯನ್ನು ದಾಟಿದರು. 11ಜನರು ನದಿ ದಾಟಿದ ಮೇಲೆ
ಯಾಜಕರು ಯೆಹೋವನ ಪವಿತ್ರಪೆಟ್ಟಿಗೆಯನ್ನು ಜನರ
ಮುಂದಗಡೆಯಲ್ಲಿ ತೆಗೆದುಕೊಂಡು ಹೋದರು.

12ರೂಬೇನ್ಯರು, ಗಾದ್ಯರು ಮತ್ತು ಮನಸ್ಸೆ ಕುಲದ
ಅರ್ಧಜನರು ಮೋಶೆಯ ಆಜ್ಞೆಯನ್ನು ಪಾಲಿಸಿದರು.
ಇವರು ಬೇರೆಯವರಿಗಿಂತ ಮುಂಚೆಯೇ ನದಿಯನ್ನು
ದಾಟಿದರು. ಯೆಹೋವನು ವಾಗ್ದಾನ ಮಾಡಿದ ದೇಶ
ವನ್ನು ಪಡೆಯಲು ಇಸ್ರೇಲರಿಗೆ ಸಹಾಯ ಮಾಡಲು
ಇವರು ಯುದ್ಧಸನ್ನದ್ಧರಾಗಿ ಹೋಗುತ್ತಿದ್ದರು. 13ಯುದ್ಧ
ಸನ್ನದ್ಧರಾದ ಸುಮಾರು ನಲವತ್ತು ಸಾವಿರ ಭಟರು
ಯೆಹೋವನ ಮುಂದೆ ಜೆರಿಕೋವಿನ ಬಯಲಿನ ಕಡೆಗೆ
ಹೋದರು.

14ಯೆಹೋವನು ಆ ದಿನ ಇಸ್ರೇಲಿನ ಎಲ್ಲಾ ಜನರ ದೃಷ್ಟಿ
ಯಲ್ಲಿ ಯೆಹೋಶುವನನ್ನು ಘನವಂತನನ್ನಾಗಿ ಮಾಡಿ
ದನು. ಆ ಹೊತ್ತಿನಿಂದ ಜನರು ಯೆಹೋಶುವನನ್ನು
ಗೌರವಿಸತೊಡಗಿದರು. ಅವರು ಮೋಶೆಯನ್ನು
ಗೌರವಿಸಿದಂತೆ ಯೆಹೋಶುವನನ್ನು ಅವನ ಜೀವಮಾನ
ವೆಲ್ಲಾ ಗೌರವಿಸಿದರು.

15ಪವಿತ್ರ ಪೆಟ್ಟಿಗೆಯನ್ನು ಹೊತ್ತುಕೊಂಡು ಹೋಗು
ತ್ತಿದ್ದ ಯಾಜಕರು ಇನ್ನೂ ನದಿಯಲ್ಲಿ ಇದ್ದಾಗ
ಯೆಹೋವನು ಯೆಹೋಶುವನಿಗೆ, 16''ನದಿಯಿಂದ
ಹೊರಬರಲು ಯಾಜಕರಿಗೆ ಆಜ್ಞಾಪಿಸು'' ಎಂದು
ಹೇಳಿದನು.

17ಯೆಹೋಶುವನು ಯಾಜಕರಿಗೆ ''ಜೋರ್ಡನ್ ನದಿ
ಯಿಂದ ಹೊರಗೆ ಬನ್ನಿರಿ'' ಎಂದು ಆಜ್ಞಾಪಿಸಿದನು.

18ಯಾಜಕರು ಯೆಹೋಶುವನ ಆಜ್ಞೆಯಂತೆ ಪವಿತ್ರ
ಪೆಟ್ಟಿಗೆಯನ್ನು ತಮ್ಮ ಸಂಗಡ ತೆಗೆದುಕೊಂಡು ನದಿಯಿಂದ
ಹೊರಗಡೆ ಬಂದರು. ಯಾಜಕರ ಪಾದಗಳು ನದಿಯ
ಆಚೆ ದಡದ ನೆಲವನ್ನು ಮುಟ್ಟಿದ ಕೂಡಲೆ ನದಿಯ ನೀರು
ಮತ್ತೆ ಹರಿಯುವುದಕ್ಕೆ ಆರಂಭಿಸಿತು. ಜನರು ದಾಟುವುದ
ಕ್ಕಿಂತ ಮುಂಚೆ ಹರಿಯುತ್ತಿದ್ದಂತೆ ನೀರು ಮತ್ತೆ ದಡ ಮೀರಿ
ಹರಿಯಿತು.

19ಅವರು ಜೋರ್ಡನ್ ನದಿಯನ್ನು ಮೊದಲನೆಯ
ತಿಂಗಳಿನ ಹತ್ತನೆಯ ದಿನ ದಾಟಿದರು. ಅವರು ಜೆರಿ
ಕೋವಿನ ಪೂರ್ವಕ್ಕಿರುವ ಗಿಲ್ಗಾಲಿನಲ್ಲಿ ಇಳಿದು
ಕೊಂಡಿದ್ದರು. 20ಅವರು ಜೋರ್ಡನ್ ನದಿಯಿಂದ
ತೆಗೆದುಕೊಂಡು ಬಂದ ಆ ಹನ್ನೆರಡು ಕಲ್ಲುಗಳನ್ನು ತಮ್ಮ
ಸಂಗಡ ತೆಗೆದುಕೊಂಡು ಹೋದರು. ಯೆಹೋಶುವನು
ಆ ಕಲ್ಲುಗಳನ್ನು ಗಿಲ್ಗಾಲಿನಲ್ಲಿ ನಿಲ್ಲಿಸಿದನು. 21ಅನಂತರ
ಯೆಹೋಶುವನು ಜನರಿಗೆ, ''ಮುಂದಿನ ಕಾಲದಲ್ಲಿ ನಿಮ್ಮ
ಮಕ್ಕಳು ನಿಮ್ಮನ್ನು, 'ಈ ಕಲ್ಲುಗಳು ಏನು ಸೂಚಿಸುತ್ತವೆ?'
ಎಂದು ಕೇಳುವಾಗ 22'ಇಸ್ರೇಲಿನ ಜನರು ಜೋರ್ಡನ್
ನದಿಯನ್ನು ಒಣನೆಲದ ಮೇಲೆ ಹೇಗೆ ದಾಟಿದರು
ಎಂಬುದನ್ನು ನಮ್ಮ ನೆನಪಿಗೆ ತರಲು ಈ ಕಲ್ಲುಗಳು
ಸಹಾಯಕವಾಗಿವೆ.' 23ನಿಮ್ಮ ದೇವರಾದ ಯೆಹೋವನು
ಜೋರ್ಡನ್ ನದಿಯ ನೀರಿನ ಚಲನೆಯನ್ನು ನಿಲ್ಲಿ
ಸಿದನು. ಕೆಂಪುಸಮುದ್ರದ ಹಾಗೆ ಈ ನದಿಯೂ ಸಹ
ಜನರೆಲ್ಲರೂ ದಾಟುವವರೆಗೆ ಬತ್ತಿಹೋಗಿತ್ತು. ಜನರು
ದಾಟಲು ಸಾಧ್ಯವಾಗುವಂತೆ ಕೆಂಪುಸಮುದ್ರದ ನೀರಿನ
ಚಲನೆಯನ್ನು ಸಹ ಯೆಹೋವನು ತಡೆದಿದ್ದನೆಂಬುದನ್ನು
ಸ್ಮರಿಸಿಕೊಳ್ಳಿ' ಎಂದು ನೀವು ಮಕ್ಕಳಿಗೆ ಹೇಳಬೇಕು. 24ಈ
ಭೂಲೋಕದ ಜನರೆಲ್ಲರೂ ಯೆಹೋವನೇ ಸರ್ವಶಕ್ತ
ನೆಂದು ತಿಳಿದುಕೊಳ್ಳಬೇಕೆಂದು ಆತನು ಹೀಗೆ ಮಾಡಿ
ದನು. ಹೀಗೆ ಅವರು ನಿಮ್ಮ ದೇವರಾದ ಯೆಹೋವನಿಗೆ
ಯಾವಾಗಲೂ ಭಯಪಡುವರು'' ಅಂದನು.

5 ಇಸ್ರೇಲರು ಜೋರ್ಡನ್ ನದಿಯನ್ನು ದಾಟುವ
ವರೆಗೆ ಯೆಹೋವನು ಆ ನದಿಯನ್ನು ಬತ್ತಿಸಿದನು.
ಜೋರ್ಡನ್ ನದಿಯ ಪಶ್ಚಿಮ ದಿಕ್ಕಿನಲ್ಲಿರುವ ಅಮೋರಿ
ಯರ ಅರಸರು ಮತ್ತು ಭೂಮಧ್ಯ ಸಾಗರದ ಹತ್ತಿರ
ವಿರುವ ಕಾನಾನ್ಯರ ಅರಸರು ಈ ಸಂಗತಿಯನ್ನು ಕೇಳಿ
ಭಯಗ್ರಸ್ತರಾದರು; ಇಸ್ರೇಲರ ವಿರುದ್ಧವಾಗಿ
ಹೋರಾಡುವಷ್ಟು ಧೈರ್ಯವಿಲ್ಲದವರಾದರು.

### ಇಸ್ರೇಲಿನ ಜನರಿಗೆ ಸುನ್ನತಿ ಮಾಡಲಾಯಿತು

2ಆಗ ಯೆಹೋವನು ಯೆಹೋಶುವನಿಗೆ, ''ಕಲ್ಲುಗ
ಳಿಂದ ಚೂರಿಗಳನ್ನು ಮಾಡಿಸಿ ಇಸ್ರೇಲಿನ ಗಂಡಸರಿಗೆ
ಇನ್ನೊಮ್ಮೆ ಸುನ್ನತಿಯನ್ನು* ಮಾಡಿಸು'' ಎಂದು
ಹೇಳಿದನು. 3ಯೆಹೋಶುವನು ಕಲ್ಲುಗಳಿಂದ ಚೂರಿ
ಗಳನ್ನು ಮಾಡಿಸಿ ಇಸ್ರೇಲರಿಗೆ ಗಿಬೆಯತ್ ಹಾರಲೋತ್
ನಲ್ಲಿ* ಸುನ್ನತಿಯನ್ನು ಮಾಡಿದನು.

4-7ಯೆಹೋಶುವನು ಸುನ್ನತಿ ಮಾಡಲು ಕಾರಣವೇ
ನೆಂದರೆ: ಈಜಿಪ್ಟನ್ನು ಬಿಟ್ಟುಹೊರಟಾಗ ಸೈನ್ಯಸೇರಲು
ಯೋಗ್ಯರಾದ ಇಸ್ರೇಲಿನ ಗಂಡಸರಿಗೆ ಸುನ್ನತಿಯಾಗಿತ್ತು.
ಅವರು ಮರುಭೂಮಿಯಲ್ಲಿದ್ದಾಗ ಅನೇಕ ಯುದ್ಧ
ವೀರರು ಯೆಹೋವನಿಗೆ ಕಿವಿಗೂಡಲಿಲ್ಲ. ಆದಕಾರಣ,
''ಹಾಲೂ ಜೇನೂ ಹರಿಯುವ ವಾಗ್ದತ್ತ ನಾಡನ್ನು'' ಆ
ಜನರು ಕಾಣುವುದಿಲ್ಲ ಎಂದು ಯೆಹೋವನು ಪ್ರಮಾಣ
ಮಾಡಿದನು. ನಮ್ಮ ಪೂರ್ವಿಕರಿಗೆ ಆ ಭೂಮಿಯನ್ನು

---

**ಸುನ್ನತಿ** ಜನನಾಂಗದ ಮುಂಭಾಗದ ಚರ್ಮವನ್ನು ಕತ್ತರಿಸುವುದು.

**ಗಿಬೆಯತ್ ಹಾರಲೋತ್** ''ಸುನ್ನತಿ ಬೆಟ್ಟ'' ಎಂದೂ ಹೇಳುವರು.

ಕೊಡುವುದಾಗಿ ಯೆಹೋವನು ವಾಗ್ದಾನ ಮಾಡಿದ್ದನು.
ಆದರೆ ಆ ಜನರು ಯೆಹೋವನ ಮಾತನ್ನು ಕೇಳದೆ
ಅವಿಧೇಯರಾದ ಕಾರಣ ಆತನು ಅವರನ್ನು ನಲವತ್ತು
ವರ್ಷಗಳ ಕಾಲ ಅಂದರೆ ಆ ಯೋಧರು ಸಾಯುವವರೆಗೆ
ಮರುಭೂಮಿಯಲ್ಲಿ ಅಲೆದಾಡುವಂತೆ ಮಾಡಿದನು. ಆ
ಎಲ್ಲ ಯುದ್ಧವೀರರು ಸತ್ತುಹೋದರು ಮತ್ತು ಅವರ
ಸ್ಥಾನಕ್ಕೆ ಅವರ ಗಂಡುಮಕ್ಕಳು ಬಂದರು. ಆದರೆ
ಈಜಿಪ್ಟಿನಿಂದ ಹೊರಟು ಮರುಭೂಮಿಯಲ್ಲಿ ಪ್ರಯಾಣ
ಮಾಡುತ್ತಿದ್ದಾಗ ಹುಟ್ಟಿದ ಯಾವ ಗಂಡುಮಕ್ಕಳಿಗೂ
ಸುನ್ನತಿ ಆಗಿರಲಿಲ್ಲ. ಆದಕ್ಕಾಗಿ ಯೆಹೋಶುವನು ಅವರಿಗೆ
ಸುನ್ನತಿ ಮಾಡಿಸಿದನು.

[8]ಯೆಹೋಶುವನು ಅವರೆಲ್ಲರಿಗೂ ಸುನ್ನತಿ ಮಾಡಿಸಿ
ದನು. ಅವರೆಲ್ಲರ ಗಾಯಗಳು ವಾಸಿಯಾಗುವವರೆಗೆ
ಅವರು ಅಲ್ಲಿಯೇ ಇದ್ದರು.

### ಕಾನಾನಿನಲ್ಲಿ ಮೊದಲನೆಯ ಪಸ್ಕಹಬ್ಬ

[9]ಆಗ ಯೆಹೋವನು ಯೆಹೋಶುವನಿಗೆ, ''ನೀವು
ಈಜಿಪ್ಟಿನಲ್ಲಿ ಗುಲಾಮರಾಗಿದ್ದಾಗ ಅವಮಾನಕ್ಕೆ ಗುರಿ
ಯಾಗಿದ್ದಿರಿ. ಆದರೆ ಇಂದು ಆ ನಾಚಿಕೆಯನ್ನು ತೆಗೆದು
ಹಾಕಿದ್ದೇನೆ'' ಎಂದನು. ಆದ್ದರಿಂದ ಯೆಹೋಶುವನು ಆ
ಸ್ಥಳಕ್ಕೆ ''ಗಿಲ್ಗಾಲ್''* ಎಂದು ಹೆಸರಿಟ್ಟನು. ಈಗಲೂ ಆ
ಸ್ಥಳಕ್ಕೆ ''ಗಿಲ್ಗಾಲ್'' ಎಂಬ ಹೆಸರಿದೆ.

[10]ಇಸ್ರೇಲರು ಇನ್ನೂ ಗಿಲ್ಗಾಲಿನಲ್ಲಿಯೇ ಇಳಿದು
ಕೊಂಡಿದ್ದಾಗ ಜೆರಿಕೋವಿನ ಮೈದಾನಗಳಲ್ಲಿ ಅವರು ಆ
ತಿಂಗಳಿನ ಹದಿನಾಲ್ಕನೆಯ ದಿನದ ಸಾಯಂಕಾಲ ಪಸ್ಕ
ಹಬ್ಬವನ್ನು ಆಚರಿಸಿದರು. [11]ಪಸ್ಕಹಬ್ಬದ ಮರುದಿನ
ಮುಂಜಾನೆಯಲ್ಲಿ ಅವರು ಆ ಭೂಮಿಯಲ್ಲಿ ಬೆಳೆದ
ಆಹಾರವನ್ನು ಊಟಮಾಡಿದರು; ಅವರು ಹುಳಿರಹಿತ
ವಾದ ರೊಟ್ಟಿಯನ್ನು ಮತ್ತು ಹುರಿದ ಕಾಳುಗಳನ್ನು ಊಟ
ಮಾಡಿದರು. [12]ಮೂರನೆಯ ದಿನ ಮುಂಜಾನೆ ಪರ
ಲೋಕದಿಂದ ಬರುತ್ತಿದ್ದ ವಿಶಿಷ್ಟ ಆಹಾರವಾದ ಮನ್ನವು
ನಿಂತುಹೋಯಿತು. ಜನರು ಕಾನಾನ್ ಪ್ರದೇಶದಲ್ಲಿ
ಬೆಳೆದ ಆಹಾರವನ್ನು ತಿಂದ ದಿನದಿಂದ ಹೀಗಾಯಿತು.
ಅಂದಿನಿಂದ ಇಸ್ರೇಲರು ಪರಲೋಕದ ವಿಶಿಷ್ಟವಾದ
ಆಹಾರವನ್ನು ಪಡೆಯಲಿಲ್ಲ.

[13]ಯೆಹೋಶುವನು ಜೆರಿಕೋವಿನ ಸಮೀಪ
ದಲ್ಲಿದ್ದಾಗ ಕಣ್ಣೆತ್ತಿ ನೋಡಲು ಒಬ್ಬ ಮನುಷ್ಯನು ಅವನ
ಎದುರಿಗೆ ನಿಂತಿರುವುದನ್ನು ಕಂಡನು. ಆ ಮನುಷ್ಯನ ಕೈ
ಯಲ್ಲಿ ಒಂದು ಖಡ್ಗವಿತ್ತು. ಯೆಹೋಶುವನು ಆ ಮನು
ಷ್ಯನ ಹತ್ತಿರ ಹೋಗಿ, ''ನೀನು ನಮ್ಮ ಜನರ ಸ್ನೇಹಿತನೋ
ಅಥವಾ ನೀನು ನಮ್ಮ ಶತ್ರುಗಳಲ್ಲಿ ಒಬ್ಬನೋ?'' ಎಂದು
ಕೇಳಿದನು. [14]''ನಾನು ಶತ್ರುವಲ್ಲ, ನಾನು ಯೆಹೋವನ
ಸೇನಾಧಿಪತಿ. ನಾನು ಈಗಲೇ ನಿನ್ನಲ್ಲಿಗೆ ಬಂದಿದ್ದೇನೆ''
ಎಂದು ಆ ಮನುಷ್ಯನು ಉತ್ತರಿಸಿದನು. ಆಗ ಯೆಹೋಶು
ವನು ನೆಲದವರೆಗೂ ತಲೆಬಾಗಿ ನಮಸ್ಕರಿಸಿ ಅವನಿಗೆ,
''ನಾನು ನಿನ್ನ ಸೇವಕ. ನನ್ನ ಒಡೆಯನು ನನಗೆ ಯಾವುದಾ
ದರೂ ಆಜ್ಞೆಯನ್ನು ವಿಧಿಸಬೇಕಾಗಿದೆಯೇ?'' ಎಂದು
ಕೇಳಿದನು. [15]ಯೆಹೋವನ ಸೇನಾಧಿಪತಿಯು ''ನಿನ್ನ
ಪಾದರಕ್ಷೆಗಳನ್ನು ಬಿಚ್ಚಿಬಿಡು. ಈಗ ನೀನು ನಿಂತುಕೊಂಡಿ
ರುವ ಸ್ಥಳವು ಪವಿತ್ರವಾದುದ್ದು'' ಎಂದು ಹೇಳಿದನು.
ಯೆಹೋಶುವನು ಅವನು ಹೇಳಿದಂತೆಯೇ ಮಾಡಿದನು.

### ಜೆರಿಕೋವನ್ನು ಸ್ವಾಧೀನಪಡಿಸಿಕೊಂಡದ್ದು

6 ಜೆರಿಕೋ ಪಟ್ಟಣದ ಬಾಗಿಲನ್ನು ಮುಚ್ಚಲಾಗಿತ್ತು.
ಇಸ್ರೇಲರು ಸಮೀಪದಲ್ಲೇ ಇದ್ದುದರಿಂದ ಪಟ್ಟಣದ
ಜನರು ಹೆದರಿಕೊಂಡಿದ್ದರು. ಒಬ್ಬರಾದರೂ ಪಟ್ಟಣದಲ್ಲಿ
ಪ್ರವೇಶಮಾಡಲಿಲ್ಲ; ಒಬ್ಬರಾದರೂ ಪಟ್ಟಣದಿಂದ
ಹೊರಬರಲಿಲ್ಲ.

[2]ಆಗ ಯೆಹೋವನು ಯೆಹೋಶುವನಿಗೆ,''ಇಗೋ
ನೋಡು, ನೀನು ಜೆರಿಕೋ ನಗರವನ್ನು ಗೆಲ್ಲುವಂತೆ
ಮಾಡುತ್ತೇನೆ. ನೀನು ಅರಸನನ್ನು ಮತ್ತು ನಗರದ ಎಲ್ಲ
ಯೋಧರನ್ನು ಸೋಲಿಸುವೆ. [3]ಪ್ರತಿನಿತ್ಯ ಒಂದು ಸಲ ನಿನ್ನ
ಸೇನೆಯೊಂದಿಗೆ ನಗರದ ಸುತ್ತಲೂ ಸುತ್ತಬೇಕು. ಹೀಗೆ
ಆರು ದಿನಗಳವರೆಗೆ ಸುತ್ತಬೇಕು. [4]ಏಳು ಮಂದಿ ಯಾಜಕ
ರಿಗೆ ಟಗರಿನ ಕೊಂಬಿನಿಂದ ಮಾಡಿದ ತುತ್ತೂರಿಗಳನ್ನು
ಹಿಡಿದುಕೊಂಡು ಪವಿತ್ರ ಪೆಟ್ಟಿಗೆಯ ಮುಂದೆ ಹೋಗಲು
ಹೇಳು. ಏಳನೆಯ ದಿನದಲ್ಲಿ ನಗರದ ಸುತ್ತಲೂ ಏಳು ಸಲ
ಸುತ್ತಬೇಕು. ಏಳನೆಯ ದಿನದಲ್ಲಿ ಸುತ್ತುವಾಗ ತುತ್ತೂರಿ
ಯನ್ನು ಊದಬೇಕೆಂದು ಯಾಜಕರಿಗೆ ಹೇಳು. [5]ಯಾಜ
ಕರ ತುತ್ತೂರಿ ಧ್ವನಿಯನ್ನು ಕೇಳಿದಾಗ ಜನರು ಆರ್ಭಟಿಸ
ಬೇಕು. ಆಗ ನಗರದ ಗೋಡೆಗಳು ಬೀಳುವವು; ಆಗ
ನೀವು ನೇರವಾಗಿ ನಗರದೊಳಗೆ ಹೋಗಿರಿ'' ಅಂದನು.

[6]ಆದುದರಿಂದ ನೂನನ ಮಗನಾದ ಯೆಹೋಶುವನು
ಯಾಜಕರನ್ನು ಒಟ್ಟಿಗೆ ಕರೆದು, ಅವರಿಗೆ, ''ಯೆಹೋವನ
ಪವಿತ್ರ ಪೆಟ್ಟಿಗೆಯನ್ನು ತೆಗೆದುಕೊಂಡು ಹೋಗಿರಿ. ಏಳು
ಮಂದಿ ಯಾಜಕರು ತುತ್ತೂರಿಗಳನ್ನು ತೆಗೆದುಕೊಂಡು
ಪೆಟ್ಟಿಗೆಯ ಮುಂದೆ ನಡೆಯಬೇಕು'' ಎಂದು ಹೇಳಿದನು.

[7]ಬಳಿಕ ಯೆಹೋಶುವನು ಜನರಿಗೆ,''ಈಗ ನಗರದ
ಸುತ್ತ ಪ್ರದಕ್ಷಿಣೆ ಹಾಕಿರಿ. ಆಯುಧಗಳನ್ನು ಹಿಡಿದು
ಕೊಂಡು ಯೋಧರು ಯೆಹೋವನ ಪವಿತ್ರ ಪೆಟ್ಟಿಗೆಯ
ಮುಂದೆ ನಡೆಯಬೇಕು'' ಎಂದು ಆಜ್ಞಾಪಿಸಿದನು.

[8]ಯೆಹೋಶುವನು ಜನರೊಂದಿಗೆ ಮಾತನಾಡು
ವದನ್ನು ಮುಗಿಸಿದ ಮೇಲೆ ಏಳು ಮಂದಿ ಯಾಜಕರು

---

**ಗಿಲ್ಗಾಲ್** ಹೀಬ್ರೂ ಭಾಷೆಯಲ್ಲಿ ಈ ಪದಕ್ಕೆ ''ಉರುಳಿ ಬೀಳು''
ಎಂಬರ್ಥವಿದೆ.

ಏಳು ತುತ್ತೂರಿಗಳನ್ನು ತೆಗೆದುಕೊಂಡು ಊದುತ್ತಾ
ಯೆಹೋವನ ಮುಂದೆ ನಡೆಯಲು ಪ್ರಾರಂಭಿಸಿದರು.
ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋಗುತ್ತಿದ್ದ ಯಾಜಕರು ಅವರನ್ನು ಹಿಂಬಾಲಿಸಿದರು.
[9]ಆಯುಧಗಳನ್ನು ಹಿಡಿದುಕೊಂಡ ಯೋಧರು ಯಾಜ
ಕರ ಮುಂದೆ ನಡೆದರು. ಪವಿತ್ರ ಪೆಟ್ಟಿಗೆಯ ಹಿಂದೆ ಜನರು
ಕ್ರಮಬದ್ಧವಾಗಿ ಹೆಜ್ಜೆಯನ್ನು ಹಾಕುತ್ತಾ ತಮ್ಮ ತುತ್ತೂರಿ
ಗಳನ್ನು ಊದುತ್ತಿದ್ದರು. [10]ಯೆಹೋಶುವನು ಜನರಿಗೆ,
‘‘ಆರ್ಭಟಿಸಬೇಡಿರಿ, ನಾನು ಹೇಳುವ ದಿನದವರೆಗೆ
ಒಂದು ಶಬ್ದವನ್ನೂ ಉಚ್ಚರಿಸಬೇಡಿರಿ. ಆಮೇಲೆ ನೀವು
ಆರ್ಭಟಿಸಬಹುದು’’ ಎಂದು ಹೇಳಿದನು.

[11]ಯಾಜಕರು ಯೆಹೋವನ ಪವಿತ್ರ ಪೆಟ್ಟಿಗೆಯನ್ನು
ಹೊತ್ತುಕೊಂಡು ಒಂದು ಸಲ ನಗರವನ್ನು ಸುತ್ತಿದ ಮೇಲೆ
ಪಾಳೆಯಕ್ಕೆ ಹಿಂತಿರುಗಿ ಬಂದು ಆ ರಾತ್ರಿ ಅಲ್ಲಿಯೇ
ಉಳಿದುಕೊಂಡರು.

[12]ಯೆಹೋಶುವನು ಮರುದಿನ ಬೆಳಿಗ್ಗೆ ಎದ್ದನು.
ಯಾಜಕರು ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಪುನಃ
ಹೊತ್ತುಕೊಂಡು ಹೋದರು. [13]ಏಳುಮಂದಿ ಯಾಜ
ಕರು ಏಳು ತುತ್ತೂರಿಗಳನ್ನು ತೆಗೆದುಕೊಂಡು
ಯೆಹೋವನ ಪವಿತ್ರ ಪೆಟ್ಟಿಗೆಯ ಮುಂದೆ ಕ್ರಮಬದ್ಧ
ವಾಗಿ ಹೆಜ್ಜೆಹಾಕುತ್ತಾ ತುತ್ತೂರಿಗಳನ್ನು ಊದುತ್ತಾ ನಡೆ
ದರು. ಆಯುಧ ಸನ್ನದ್ಧರಾದ ಸೈನಿಕರು ಅವರ ಮುಂದೆ
ಕ್ರಮಬದ್ಧವಾಗಿ ಹೆಜ್ಜೆಹಾಕುತ್ತಾ ನಡೆದರು. ಯೆಹೋವನ
ಪವಿತ್ರ ಪೆಟ್ಟಿಗೆಯ ಹಿಂಭಾಗದಲ್ಲಿ ಉಳಿದ ಜನರು
ಕ್ರಮಬದ್ಧವಾಗಿ ಹೆಜ್ಜೆಹಾಕುತ್ತಾ ತುತ್ತೂರಿ ಊದುತ್ತಾ
ಪಟ್ಟಣದ ಸುತ್ತಲೂ ನಡೆದರು.

[14]ಎರಡನೆಯ ದಿನ ಅವರೆಲ್ಲರು ನಗರವನ್ನು ಒಂದು
ಸಲ ಕ್ರಮಬದ್ಧವಾಗಿ ಸುತ್ತಿ ಪಾಳೆಯಕ್ಕೆ ಹಿಂತಿರುಗಿದರು.
ಹೀಗೆ ಅವರು ಆರು ದಿನಗಳವರೆಗೆ ಮಾಡಿದರು.

[15]ಏಳನೆಯ ದಿನ ಸೂರ್ಯೋದಯವಾಗುತ್ತಲೇ
ಅವರು ಎದ್ದರು. ಪಟ್ಟಣದ ಸುತ್ತಲು ಅವರು ಏಳು ಸಲ
ಸುತ್ತಿದರು. ಅವರು ಮುಂಚಿನ ದಿನಗಳಲ್ಲಿ ನಡೆದ ಕ್ರಮ
ದಲ್ಲಿಯೇ ನಡೆದರು. ಆದರೆ ಆ ದಿನ ಅವರು ನಗರದ
ಸುತ್ತಲು ಏಳು ಸಲ ಸುತ್ತಿದರು. [16]ಏಳನೆಯ ಸಲ ಅವರು
ನಗರವನ್ನು ಸುತ್ತುವಾಗ ಯಾಜಕರು ತುತ್ತೂರಿಗಳನ್ನು
ಊದಿದರು. ಆಗ ಯೆಹೋಶುವನು, ‘‘ಈಗ ಆರ್ಭಟಿ
ಸಿರಿ, ಯೆಹೋವನು ಈ ನಗರವನ್ನು ನಿಮಗೆ ಕೊಟ್ಟಿದ್ದಾನೆ.
[17]ಈ ನಗರ ಮತ್ತು ಇದರಲಿರುವದೆಲ್ಲವೂ ಕರ್ತನ
ಸ್ವತ್ತಾಗಿದೆ.* ವೇಶ್ಯೆಯಾದ ರಾಹಾಬಳು ಮತ್ತು ಅವಳ
ಮನೆಯಲ್ಲಿರುವ ಎಲ್ಲ ಜನರು ಮಾತ್ರ, ಜೀವಸಹಿತ
ಉಳಿಯಲಿ, ಅವರನ್ನು ಕೊಲ್ಲಬಾರದು. ಏಕೆಂದರೆ
ರಾಹಾಬಳು ನಮ್ಮ ಆ ಇಬ್ಬರು ಗೂಢಚಾರರಿಗೆ ಸಹಾಯ
ಮಾಡಿದ್ದಾಳೆ. [18]ಅಲ್ಲದೆ ನಾವು ಉಳಿದೆಲ್ಲವನ್ನು ನಾಶ
ಪಡಿಸಬೇಕೆಂಬುದನ್ನು ನೆನಪಿಡಿ. ಅವರ ವಸ್ತುಗಳನ್ನು
ತೆಗೆದುಕೊಳ್ಳಬೇಡಿ. ನೀವು ಅವರ ವಸ್ತುಗಳನ್ನು ತೆಗೆದು
ಕೊಂಡರೆ ಮತ್ತು ಅವುಗಳನ್ನು ನಮ್ಮ ಪಾಳೆಯಕ್ಕೆ ತಂದರೆ
ನೀವೇ ನಾಶವಾಗುವಿರಿ; ಇಸ್ರೇಲಿನ ಎಲ್ಲಾ ಜನರಿಗೆ ಕಷ್ಟ
ವನ್ನುಂಟುಮಾಡುವಿರಿ. [19]ಬೆಳ್ಳಿ, ಬಂಗಾರ, ಕಂಚು ಮತ್ತು
ಕಬ್ಬಿಣಗಳಿಂದ ಮಾಡಿದ ಎಲ್ಲಾ ವಸ್ತುಗಳು ಯೆಹೋವನ
ಸ್ವತ್ತಾಗಿವೆ. ಆದ್ದರಿಂದ ಅವುಗಳನ್ನು ಆತನ ಭಂಡಾರಕ್ಕೆ
ಸೇರಿಸಬೇಕು’’ ಎಂದು ಆಜ್ಞಾಪಿಸಿದನು.

[20]ಯಾಜಕರು ತುತ್ತೂರಿಗಳನ್ನು ಊದಿದಾಗ ಜನರು
ಆರ್ಭಟಿಸತೊಡಗಿದರು. ಆಗ ಗೋಡೆಗಳು ಬಿದ್ದವು;
ಜನರು ನೇರವಾಗಿ ನಗರದೊಳಗೆ ನುಗ್ಗಿದರು. ಹೀಗೆ
ಇಸ್ರೇಲರು ನಗರವನ್ನು ಸ್ವಾಧೀನಪಡಿಸಿಕೊಂಡರು.
[21]ಅವರು ನಗರದಲ್ಲಿದ್ದ ಎಲ್ಲವನ್ನು ನಾಶಪಡಿಸಿದರು;
ಅಲ್ಲಿದ್ದ ತರುಣರನ್ನು, ವೃದ್ಧರನ್ನು ತರುಣಿಯರನ್ನು, ವೃದ್ಧೆ
ಯರನ್ನು, ದನಕರುಗಳನ್ನು, ಕುರಿಗಳನ್ನು ಮತ್ತು ಕತ್ತೆ
ಗಳನ್ನು ಕೊಂದುಹಾಕಿದರು.

[22]ಯೆಹೋಶುವನು ಆ ಇಬ್ಬರು ಗೂಢಚಾರರಿಗೆ,
‘‘ನೀವು ಪ್ರಮಾಣ ಮಾಡಿರುವುದರಿಂದ ಆ ವೇಶ್ಯೆಯ
ಮನೆಗೆ ಹೋಗಿ ಅವಳನ್ನು ಹೊರಗೆ ಕರೆದುಕೊಂಡು
ಬನ್ನಿ. ಅವಳ ಸಂಗಡ ಇರುವ ಎಲ್ಲಾ ಜನರನ್ನೂ ಕರೆದು
ಕೊಂಡು ಬನ್ನಿ’’ ಎಂದು ಹೇಳಿದನು. [23]ಆ ಇಬ್ಬರು,
ರಾಹಾಬಳ ಮನೆಗೆ ಹೋಗಿ ಅವಳನ್ನು ಹೊರಗೆ ಕರೆದು
ಕೊಂಡು ಬಂದರು. ಅವಳ ತಂದೆ, ತಾಯಿ, ಸಹೋ
ದರರು, ಮತ್ತು ಅವಳ ಎಲ್ಲ ಕುಟುಂಬದವರನ್ನು ಮತ್ತು
ಅವಳ ಸಂಗಡ ಅಲ್ಲಿ ಇದ್ದ ಬೇರೆ ಎಲ್ಲ ಜನರನ್ನು ಸಹ
ಅವರು ಹೊರಗೆ ಕರೆದುಕೊಂಡು ಬಂದರು. ಅವರೆ
ಲ್ಲರನ್ನು ಇಸ್ರೇಲಿನ ಜನರ ಪಾಳೆಯದ ಹೊರಗಡೆ ಒಂದು
ಸುರಕ್ಷಿತವಾದ ಸ್ಥಳದಲ್ಲಿ ಇರಿಸಿದರು.

[24]ಬಳಿಕ ಇಸ್ರೇಲರು ಇಡೀ ನಗರವನ್ನು ಸುಟ್ಟು ಹಾಕಿ
ದರು. ಅವರು ಬೆಳ್ಳಿ, ಬಂಗಾರ, ಕಂಚು ಮತ್ತು ಕಬ್ಬಿಣ
ಗಳಿಂದ ಮಾಡಿದ ವಸ್ತುಗಳನ್ನು ಬಿಟ್ಟು ನಗರದಲ್ಲಿನ ಉಳಿ
ದೆಲ್ಲವನ್ನು ಸುಟ್ಟುಹಾಕಿದರು. ಅವರು ಆ ವಸ್ತು ಗಳನ್ನು
ಯೆಹೋವನಿಗಾಗಿ ಉಳಿಸಿದರು. [25]ಯೆಹೋಶುವನು
ವೇಶ್ಯೆಯಾದ ರಾಹಾಬಳನ್ನೂ ಅವಳ ಕುಟುಂಬವನ್ನೂ
ಅವಳ ಸಂಗಡ ಇದ್ದ ಬೇರೆ ಜನರನ್ನೂ ಉಳಿಸಿದನು.
ಯೆಹೋಶುವನು ಜೆರಿಕೋವಿಗೆ ಕಳಿಸಿಕೊಟ್ಟ ಗೂಢ
ಚಾರರಿಗೆ ರಾಹಾಬಳು ಸಹಾಯ ಮಾಡಿದುದಕ್ಕಾಗಿ
ಯೆಹೋಶುವನು ಅವರೆಲ್ಲರನ್ನು ಉಳಿಸಿದನು. ರಾಹಾ
ಬಳು ಇಂದಿಗೂ ಸಹ ಇಸ್ರೇಲಿನ ಜನರೊಂದಿಗೆ ವಾಸವಾಗಿ
ದ್ದಾಳೆ. [26]ಆ ಸಮಯದಲ್ಲಿ ಯೆಹೋಶುವನು,

---

**ಕರ್ತನ ಸ್ವತ್ತು** ಸಾಧಾರಣವಾಗಿ ಈ ವಸ್ತುಗಳನ್ನು ದೇವಸ್ಥಾನದ ಭಂಡಾರದಲ್ಲಿ ಇಡುತ್ತಾರೆ ಅಥವಾ ನಾಶಪಡಿಸುತ್ತಾರೆ.

“ಈ ಜೆರಿಕೋ ಪಟ್ಟಣವನ್ನು ಪುನಃ ಕಟ್ಟಲು
ಪ್ರಯತ್ನಿಸುವವನು ಶಾಪಗ್ರಸ್ತನಾಗಲಿ. ಈ
ನಗರಕ್ಕೆ ಅಡಿಗಲ್ಲನ್ನಿಡುವ ವ್ಯಕ್ತಿಯು ತನ್ನ
ಹಿರಿಯ ಮಗನನ್ನು ಕಳೆದುಕೊಳ್ಳಲಿ; ಹೆಬ್ಬಾಗಿ
ಲನ್ನು ನಿಲ್ಲಿಸುವ ವ್ಯಕ್ತಿ ತನ್ನ ಕಿರಿಯ ಮಗನನ್ನು
ಕಳೆದುಕೊಳ್ಳಲಿ” ಎಂದು ಹೇಳಿದನು.

27ಯೆಹೋವನು ಯೆಹೋಶುವನ ಸಂಗಡ ಇದ್ದನು.
ಯೆಹೋಶುವನು ದೇಶದಲ್ಲೆಲ್ಲ ಸುಪ್ರಸಿದ್ಧನಾದನು.

### ಆಕಾನನ ಪಾಪ

7 ಇಸ್ರೇಲರು ಯೆಹೋವನ ಆಜ್ಞೆಗೆ ವಿಧೇಯ
ರಾಗಲಿಲ್ಲ. ಯೆಹೂದ ಕುಲದವನೂ ಕರ್ಮೀಯ
ಮಗನೂ ಜಬ್ದೀಯ ಮೊಮ್ಮಗನೂ. ಜೆರಹನ ಗೋತ್ರ
ದವನೂ ಆದ ಆಕಾನ ಎಂಬವನು ನಾಶಮಾಡಬೇಕಾದ
ವಸ್ತುಗಳಲ್ಲಿ ಕೆಲವನ್ನು ಇಟ್ಟುಕೊಂಡಿದ್ದನು. ಅದಕ್ಕಾಗಿ
ಯೆಹೋವನು ಇಸ್ರೇಲಿನವರ ಮೇಲೆ ತುಂಬಾ ಕೋಪ
ಗೊಂಡನು. 2ಜೆರಿಕೋವನ್ನು ಸ್ವಾಧೀನಪಡಿಸಿಕೊಂಡ
ಮೇಲೆ ಯೆಹೋಶುವನು ಕೆಲವು ಜನರನ್ನು ‘ಆಯಿ’
ಎಂಬ ಪಟ್ಟಣಕ್ಕೆ ಕಳುಹಿಸಿದನು. ‘ಆಯಿ’ ಬೇತಾವೆನಿನ
ಸಮೀಪಕ್ಕೂ ಬೇತೇಲಿನ ಪೂರ್ವಕ್ಕೂ ಇತ್ತು.
ಯೆಹೋಶುವನು “‘ಆಯಿ’ಗೆ ಹೋಗಿರಿ ಮತ್ತು ಆ
ಪ್ರಾಂತ್ಯದ ದುರ್ಬಲತೆಗಳನ್ನು ಕಂಡು ಹಿಡಿಯಿರಿ”
ಎಂದು ಹೇಳಿದನು. ಆಗ ಅವರು ಆ ಪ್ರದೇಶದಲ್ಲಿ ಗೂಢ
ಚರ್ಯವನ್ನು ಮಾಡುವುದಕ್ಕೆ ಹೋದರು.
3ತರುವಾಯ ಆ ಜನರು ಯೆಹೋಶುವನಲ್ಲಿಗೆ ಬಂದು,
“ಆಯಿ ಒಂದು ದುರ್ಬಲ ಪ್ರದೇಶವಾಗಿದೆ, ಆ ಪ್ರದೇಶ
ವನ್ನು ಸ್ವಾಧೀನಪಡಿಸಿಕೊಳ್ಳುವುದಕ್ಕೆ ನಮ್ಮ ಎಲ್ಲ ಜನರು
ಬೇಕಾಗುವುದಿಲ್ಲ. ಅಲ್ಲಿ ಯುದ್ಧಮಾಡಲು ಎರಡು
ಅಥವಾ ಮೂರು ಸಾವಿರ ಜನರನ್ನು ಕಳುಹಿಸಿದರೆ ಸಾಕು,
ಇಡೀ ಸೈನ್ಯವನ್ನು ಉಪಯೋಗಿಸುವ ಅವಶ್ಯಕತೆ ಇಲ್ಲ.
ಅಲ್ಲಿ ನಮ್ಮ ವಿರುದ್ಧ ಹೋರಾಡಬಲ್ಲ ಕೆಲವೇ ಜನರು
ಇದ್ದಾರೆ” ಎಂದು ಹೇಳಿದರು. 4-5ಸುಮಾರು ಮೂರು
ಸಾವಿರ ಜನರು ‘ಆಯಿ’*ಗೆ ಹೋದರು. ಆದರೆ
‘ಆಯಿ’ಯ ಜನರು ಇಸ್ರೇಲಿನ ಸುಮಾರು ಮೂವತ್ತಾರು
ಜನರನ್ನು ಕೊಂದುಹಾಕಿದರು. ಆದ್ದರಿಂದ ಇಸ್ರೇಲಿನ
ಜನರು ಓಡಿ ಹೋದರು. ‘ಆಯಿ’ಯ ಜನರು ಅವರನ್ನು
ಪಟ್ಟಣದ ದ್ವಾರದಿಂದ ಕಲ್ಲುಗಣಿಗಳವರೆಗೆ ಬೆನ್ನಟ್ಟಿ
ಕೊಂಡು ಬಂದರು. ‘ಆಯಿ’ಯ ಜನರು ಅವರನ್ನು
ಚೆನ್ನಾಗಿ ಥಳಿಸಿದರು.
ಆಗ ಇಸ್ರೇಲರು ತುಂಬ ಭಯಗೊಂಡು ಧೈರ್ಯವನ್ನು
ಕಳೆದುಕೊಂಡರು. 6ಇದನ್ನು ಕೇಳಿ ಯೆಹೋಶುವನು
ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು ಪವಿತ್ರ
ಪೆಟ್ಟಿಗೆಯ ಮುಂದೆ ನೆಲದ ಮೇಲೆ ಬೋರಲಾಗಿ
ಬಿದ್ದುಕೊಂಡನು. ಸಾಯಂಕಾಲದವರೆಗೂ ಯೆಹೋಶು
ವನು ಹಾಗೆಯೇ ಇದ್ದನು. ಇಸ್ರೇಲಿನ ಹಿರಿಯರೂ
ಹಾಗೆಯೇ ಮಾಡಿದರು. ಅವರು ದುಃಖದಿಂದ ತಮ್ಮ
ತಲೆಯ ಮೇಲೆ ಧೂಳನ್ನು ಸುರಿದುಕೊಂಡರು.
7ಯೆಹೋಶುವನು, “ಯೆಹೋವನೇ ನನ್ನ ಒಡೆ
ಯನೇ, ನಮ್ಮ ಜನರನ್ನು ನೀನು ಜೋರ್ಡನ್ ನದಿ
ದಾಟಿಸಿ ಕರೆದುಕೊಂಡು ಬಂದೆ. ನಮ್ಮನ್ನು ಇಲ್ಲಿಯವರೆಗೆ
ಕರೆದುತಂದು ಅಮೋರಿಯರಿಂದ ನಾಶವಾಗಲು
ನಮ್ಮನ್ನು ಬಿಟ್ಟುಕೊಡುವುದೇಕೆ? ನಾವು ಇದ್ದುದರಲ್ಲಿ
ತೃಪ್ತಿಪಟ್ಟುಕೊಂಡು ಜೋರ್ಡನ್ ನದಿಯ ಆಚೆ
ಯಲ್ಲಿಯೇ ಇರಬೇಕಾಗಿತ್ತು. 8ಯೆಹೋವನೇ,
‘ಇಸ್ರೇಲರು ವೈರಿಗಳ ಮುಂದೆ ಸೋತು ಹೋಗಿದ್ದಾ
ರಲ್ಲಾ! ಈಗ ನಾನೇನು ಹೇಳಲಿ? 9ಈ ವಿಷಯವು
ಕಾನಾನ್ಯರಿಗೂ ದೇಶದ ಉಳಿದ ಎಲ್ಲಾ ಜನರಿಗೂ
ತಿಳಿಯುವುದು. ಆಗ ಅವರು ನಮ್ಮ ಮೇಲೆ ದಾಳಿಮಾಡಿ
ನಮ್ಮೆಲ್ಲರನ್ನು ಕೊಂದು ಹಾಕುತ್ತಾರೆ. ಆಗ ನೀನು ನಿನ್ನ
ಕೀರ್ತಿಯನ್ನು ಉಳಿಸಿಕೊಳ್ಳಲು ಏನು ಮಾಡುವೆ?”
ಎಂದು ಪ್ರಲಾಪಿಸಿದನು.
10ಯೆಹೋವನು ಯೆಹೋಶುವನಿಗೆ, “ಮೇಲಕ್ಕೆ
ಏಳು, ನೀನು ಹೀಗೆ ಬೋರಲು ಬಿದ್ದಿರುವದೇಕೆ?
11ಇಸ್ರೇಲರು ಪಾಪಮಾಡಿದ್ದಾರೆ. ನಾನು ಮಾಡಿಕೊಂಡ
ಒಡಂಬಡಿಕೆಯನ್ನು ಮೀರಿದ್ದಾರೆ. ನಾನು ನಾಶಪಡಿಸಲು
ಹೇಳಿದ ವಸ್ತುಗಳಲ್ಲಿ ಕೆಲವನ್ನು ಅವರು ತೆಗೆದುಕೊಂಡಿ
ದ್ದಾರೆ; ಅವರು ನನ್ನಿಂದ ಕದ್ದಿದ್ದಾರೆ; ಸುಳ್ಳು ಹೇಳಿದ್ದಾರೆ.
ಅವರು ಆ ವಸ್ತುಗಳನ್ನು ತಮಗಾಗಿ ತೆಗೆದುಕೊಂಡಿದ್ದಾರೆ.
12ಅದಕ್ಕಾಗಿಯೇ ಇಸ್ರೇಲಿನ ಸೈನ್ಯವು ಯುದ್ಧದಿಂದ
ವಿಮುಖವಾಗಿ ಓಡಿಬಂತು. ಅವರು ತಪ್ಪನ್ನು ಮಾಡಿದ್ದ
ರಿಂದಲೇ ಶಾಪಕ್ಕೆ ಗುರಿಯಾಗಿದ್ದಾರೆ. ಆ ಪಾಪವನ್ನು
ನಿಮ್ಮಿಂದ ತೆಗೆದುಹಾಕಬೇಕು, ಅಲ್ಲಿಯವರೆಗೆ ನಾನು
ನಿಮಗೆ ಸಹಾಯ ಮಾಡುವುದಿಲ್ಲ, ನಾನು ನಿಮ್ಮ ಸಂಗಡ
ಬರುವುದೇ ಇಲ್ಲ. 13“ಈಗ ಹೋಗಿ ಜನರನ್ನು ಶುದ್ಧ
ಗೊಳಿಸು, ನೀನು ಜನರಿಗೆ, ‘ನೀವು ನಿಮ್ಮನ್ನು ಶುದ್ಧಿ
ಗೊಳಿಸಿಕೊಳ್ಳಿರಿ, ನಾಳೆಗಾಗಿ ಸಿದ್ಧರಾಗಿರಿ, ಇಸ್ರೇಲಿನ
ದೇವರಾದ ಯೆಹೋವನು ನಾಶಪಡಿಸಬೇಕೆಂದು ಆಜ್ಞಾ
ಪಿಸಿದ ವಸ್ತುಗಳನ್ನು ಕೆಲ ಜನರು ಇಟ್ಟುಕೊಂಡಿದ್ದಾರೆಂದು
ಹೇಳುತ್ತಾನೆ. ನೀವು ಆ ವಸ್ತುಗಳನ್ನು ಬಿಸಾಡುವವರೆಗೆ
ನಿಮಗೆ ನಿಮ್ಮ ಶತ್ರುಗಳನ್ನು ಸೋಲಿಸಲು ಎಂದಿಗೂ
ಸಾಧ್ಯವಿಲ್ಲ.
14“ನಾಳೆ ಬೆಳಿಗ್ಗೆ ನೀವೆಲ್ಲರು ಯೆಹೋವನ ಮುಂದೆ
ಬಂದು ನಿಲ್ಲಬೇಕು. ಎಲ್ಲಾ ಕುಲಗಳು ಯೆಹೋವನ
ಮುಂದೆ ಬಂದು ನಿಲ್ಲಬೇಕು. ಯೆಹೋವನು ಒಂದು

**ಆಯಿ** ಈ ಊರಿನ ಹೆಸರಿನ ಅರ್ಥ “ಪಾಳು” ಎಂದಾಗುತ್ತದೆ.

ಕುಲವನ್ನು ಸೂಚಿಸುತ್ತಾನೆ. ಆಗ ಆ ಕುಲ ಮಾತ್ರ ಮುಂದೆ
ನಿಲ್ಲಬೇಕು. ಆಗ ಯೆಹೋವನು ಒಂದು ಗೋತ್ರವನ್ನು
ಸೂಚಿಸುತ್ತಾನೆ. ಆಗ ಆ ಗೋತ್ರದವರು ಮಾತ್ರ
ಯೆಹೋವನ ಮುಂದೆ ನಿಲ್ಲಬೇಕು. ಆಗ ಯೆಹೋವನು
ಆ ಗೋತ್ರದ ಪ್ರತಿಯೊಂದು ಕುಟುಂಬವನ್ನು ನೋಡಿ,
ಒಂದು ಕುಟುಂಬವನ್ನು ಸೂಚಿಸುತ್ತಾನೆ. ಬಳಿಕ
ಯೆಹೋವನು ಆ ಕುಟುಂಬದ ಪ್ರತಿಯೊಬ್ಬ ಮನುಷ್ಯ
ನನ್ನು ನೋಡುತ್ತಾನೆ. 15 ಆಗ ನಾವು ನಾಶಪಡಿಸ
ಬೇಕಾಗಿದ್ದ ವಸ್ತುಗಳನ್ನು ಇಟ್ಟುಕೊಂಡ ಮನುಷ್ಯನು ಸಿಕ್ಕಿ
ಬೀಳುತ್ತಾನೆ. ಬಳಿಕ ಆ ಮನುಷ್ಯನು ಬೆಂಕಿಯಿಂದ ನಾಶ
ವಾಗುವನು. ಅವನ ಎಲ್ಲಾ ಸ್ವತ್ತು ಅವನೊಂದಿಗೆ ನಾಶ
ವಾಗುವುದು. ಆ ಮನುಷ್ಯನು ಯೆಹೋವನ ಆಜ್ಞೆಯನ್ನು
ಮೀರಿದ್ದಾನೆ. ಇಸ್ರೇಲರಿಗೆ ಕೇಡನ್ನು ಬರಮಾಡಿದ್ದಾನೆ.''
ಎಂದನು.

16 ಮಾರನೆಯ ದಿನ ಬೆಳಿಗ್ಗೆ ಯೆಹೋಶುವನು
ಇಸ್ರೇಲಿನ ಎಲ್ಲ ಜನರನ್ನು ಯೆಹೋವನ ಮುಂದೆ ಕರೆದು
ಕೊಂಡು ಬಂದನು. ಎಲ್ಲ ಕುಲಗಳು ಯೆಹೋವನ
ಮುಂದೆ ನಿಂತುಕೊಂಡವು. ಯೆಹೋವನು ಯೆಹೂದ
ಕುಲವನ್ನು ಸೂಚಿಸಿದನು. 17 ಆದುದರಿಂದ ಯೆಹೂದ
ಕುಲದ ಎಲ್ಲ ಗೋತ್ರಗಳು ಯೆಹೋವನ ಮುಂದೆ ಬಂದು
ನಿಂತವು. ಯೆಹೋವನು ಜೆರಹನ ಗೋತ್ರವನ್ನು ಸೂಚಿಸಿ
ದನು. ಆಗ ಜೆರಹನ ಗೋತ್ರದ ಎಲ್ಲ ಕುಟುಂಬಗಳು
ಯೆಹೋವನ ಎದುರಿಗೆ ಬಂದು ನಿಂತವು. ಆಗ ಜಬ್ದೀಯ
ಕುಟುಂಬವನ್ನು ಸೂಚಿಸಲಾಯಿತು. 18 ಆಗ ಯೆಹೋಶು
ವನು ಆ ಕುಟುಂಬದ ಎಲ್ಲ ಗಂಡಸರನ್ನು ಯೆಹೋವನ
ಮುಂದೆ ಬರಲು ಹೇಳಿದನು. ಯೆಹೋವನು ಆಗ
ಕರ್ಮೀಯ ಮಗನಾದ ಆಕಾನನನ್ನು ಸೂಚಿಸಿದನು.
ಕರ್ಮೀಯು ಜಬ್ದೀಯ ಮಗನಾಗಿದ್ದನು, ಜಬ್ದೀಯು
ಜೆರಹನ ಮಗನಾಗಿದ್ದನು.

19 ಆಗ ಯೆಹೋಶುವನು ಆಕಾನನಿಗೆ, ''ನನ್ನ ಮಗನೇ,
ಇಸ್ರೇಲಿನ ದೇವರಾದ ಯೆಹೋವನನ್ನು ಸನ್ಮಾನಿಸು; ನಿನ್ನ
ಪಾಪಗಳನ್ನು ಆತನಿಗೆ ಅರಿಕೆಮಾಡು. ನೀನು ಮಾಡಿದ್ದನ್ನು
ನನಗೆ ಹೇಳು. ನನ್ನಿಂದ ಏನನ್ನೂ ಮುಚ್ಚಿಡಬೇಡ''
ಎಂದನು.

20 ಆಗ ಆಕಾನನು,''ಇದು ಸತ್ಯ . ನಾನು ಇಸ್ರೇಲಿನ
ದೇವರಾದ ಯೆಹೋವನಿಗೆ ವಿರೋಧವಾಗಿ ಪಾಪಮಾಡಿ
ದ್ದೇನೆ. 21 ನಾವು ಜೆರಿಕೋ ನಗರವನ್ನು ಮತ್ತು ಅದರಲ್ಲಿದ್ದ
ಎಲ್ಲ ವಸ್ತುಗಳನ್ನು ಸ್ವಾಧೀನಪಡಿಸಿಕೊಂಡು ಕೊಳ್ಳೆ
ಹೊಡೆಯುತ್ತಿದ್ದಾಗ, ಬಾಬಿಲೋನಿನ ಒಂದು ಸುಂದರ
ವಾದ ನಿಲುವಂಗಿಯನ್ನೂ ಸುಮಾರು ಐದು ಪೌಂಡಿನಷ್ಟು
ಬೆಳ್ಳಿಯನ್ನೂ ಒಂದು ಪೌಂಡಿಗಿಂತಲೂ ಹೆಚ್ಚು ಬಂಗಾರ
ವನ್ನೂ ಕಂಡೆನು. ಈ ವಸ್ತುಗಳನ್ನು ನನಗಾಗಿ ಇಟ್ಟುಕೊಳ್ಳ
ಬೇಕೆಂದು ತುಂಬ ಆಶೆಯಾಯಿತು. ಅದಕ್ಕಾಗಿ ನಾನು
ಅವುಗಳನ್ನು ತೆಗೆದುಕೊಂಡೆ. ಅವುಗಳನ್ನು ನನ್ನ ಗುಡಾರ
ದಲ್ಲಿ ಹುಗಿದಿಟ್ಟಿದ್ದೇನೆ. ಬೆಳ್ಳಿಯು ನಿಲುವಂಗಿಯ ಕೆಳಗಡೆ
ಇದೆ'' ಎಂದು ಒಪ್ಪಿಕೊಂಡನು. 22 ಆಗ ಯೆಹೋಶುವನು
ಕೆಲವರನ್ನು ಗುಡಾರಕ್ಕೆ ಕಳುಹಿಸಿದನು. ಅವರು ಗುಡಾ
ರಕ್ಕೆ ಓಡಿಹೋಗಿ ಹುಗಿದಿಟ್ಟಿದ್ದ ಆ ವಸ್ತುಗಳನ್ನು ಕಂಡರು.
ಬೆಳ್ಳಿಯು ನಿಲುವಂಗಿಯ ಕೆಳಗಡೆ ಇತ್ತು. 23 ಜನರು ಆ
ವಸ್ತುಗಳನ್ನು ಗುಡಾರದ ಹೊರಗೆ ತೆಗೆದುಕೊಂಡು
ಬಂದು ಯೆಹೋಶುವನ ಮತ್ತು ಎಲ್ಲಾ ಇಸ್ರೇಲರ ಬಳಿಗೆ
ಬಂದರು. ಅವರು ಯೆಹೋವನ ಮುಂದೆ ಆ ವಸ್ತು
ಗಳನ್ನೆಲ್ಲಾ ನೆಲದ ಮೇಲೆ ಹಾಕಿದರು.

24 ಆಗ ಯೆಹೋಶುವನು ಮತ್ತು ಎಲ್ಲಾ ಇಸ್ರೇಲರು
ಸೇರಿ ಜೆರಹನ ಮಗನಾದ ಆಕಾನನನ್ನು, ಬೆಳ್ಳಿಯನ್ನು,
ನಿಲುವಂಗಿಯನ್ನು, ಬಂಗಾರವನ್ನು, ಆಕಾನನ ಮಕ್ಕ
ಳನ್ನು, ಅವನ ದನಕರುಗಳನ್ನು, ಕತ್ತೆಗಳನ್ನು, ಅವನ ಕುರಿ
ಗಳನ್ನು, ಅವನ ಗುಡಾರವನ್ನು ಮತ್ತು ಅವನ ಎಲ್ಲ ಸ್ವತ್ತನ್ನು
'ಆಕೋರ್'* ಕಣಿವೆಗೆ ತೆಗೆದುಕೊಂಡು ಹೋದರು.
25 ಆಗ ಯೆಹೋಶುವನು,''ನೀನು ನಮಗೆ ಕೇಡನ್ನು
ಬರಮಾಡಿರುವೆ! ಆದ್ದರಿಂದ ಯೆಹೋವನು ನಿನಗೂ
ಕೇಡನ್ನು ಮಾಡಲಿ!'' ಎಂದನು. ಆಗ ಜನರೆಲ್ಲರೂ ಕಲ್ಲು
ಗಳನ್ನು ತೂರಿ ಆಕಾನನನ್ನೂ ಅವನ ಕುಟುಂಬದವರನ್ನೂ
ಕೊಂದರು ಮತ್ತು ಅವನ ಎಲ್ಲ ಸ್ವತ್ತನ್ನು ಸುಟ್ಟುಹಾಕಿದರು.
26 ಆಕಾನನನ್ನು ಸುಟ್ಟ ಬಳಿಕ ಅವರು ಅವನ ದೇಹದ
ಮೇಲೆ ಕಲ್ಲುಗಳ ದೊಡ್ಡ ಕುಪ್ಪೆಯನ್ನು ಹಾಕಿದರು. ಆ
ಕುಪ್ಪೆಯು ಇಂದಿಗೂ ಅಲ್ಲಿದೆ. ಹೀಗೆ ದೇವರು ಆಕಾನ
ನನ್ನು ಶಿಕ್ಷಿಸಿದನು. ಅದಕ್ಕಾಗಿ ಆ ಕಣಿವೆಗೆ 'ಆಕೋರ್
ಕಣಿವೆ' ಎಂಬ ಹೆಸರು ಬಂದಿತು. ಬಳಿಕ ಯೆಹೋವನಿಗೆ
ಜನರ ಮೇಲಿದ್ದ ಕೋಪ ಶಮನವಾಯಿತು.

### 'ಆಯಿ' ಯ ವಿನಾಶ

8 ಆಗ ಯೆಹೋವನು ಯೆಹೋಶುವನಿಗೆ, ''ಭಯ
ಪಡಬೇಡ, ನಿರಾಶೆಗೊಳ್ಳಬೇಡ. ನಿಮ್ಮ ಎಲ್ಲ
ಯೋಧರನ್ನು 'ಆಯಿ'ಗೆ ತೆಗೆದುಕೊಂಡು ಹೋಗು.
'ಆಯಿ'ಯ ಅರಸನನ್ನು ಸೋಲಿಸಲು ನಾನು ನಿನಗೆ
ಸಹಾಯ ಮಾಡುತ್ತೇನೆ.ನಾನು ನಿನಗೆ ಅವನ ಜನರನ್ನು,
ಅವನ ಪಟ್ಟಣವನ್ನು ಮತ್ತು ಅವನ ಪ್ರದೇಶವನ್ನು
ಕೊಡುವೆನು. 2 ಜೆರಿಕೋ ಮತ್ತು ಅದರ ರಾಜನಿಗೆ
ಮಾಡಿದಂತೆಯೇ ನೀವು 'ಆಯಿ' ಮತ್ತು ಅದರ ಅರಸನಿಗೆ
ಮಾಡಬೇಕು. ಈ ಸಲ ಮಾತ್ರ ನೀವು ಎಲ್ಲ ಸಂಪತ್ತನ್ನು
ತೆಗೆದುಕೊಂಡು ನಿಮಗಾಗಿ ಇಟ್ಟುಕೊಳ್ಳಬೇಕು. ನೀವು ಈ
ಸಂಪತ್ತನ್ನು ನಿಮ್ಮ ಜನರೊಂದಿಗೆ ಹಂಚಿಕೊಳ್ಳಿರಿ. ಈಗ,
ನಿಮ್ಮ ಕೆಲವು ಯೋಧರಿಗೆ ಪಟ್ಟಣದ ಹಿಂಭಾಗದಲ್ಲಿ
ಅಡಗಿಕೊಂಡಿರಲು ತಿಳಿಸು'' ಅಂದನು.

---

**ಆಕೋರ್** ಈ ಹೆಸರಿನ ಅರ್ಥ ''ಕಷ್ಟ'' ಅಥವಾ ''ತೊಂದರೆ''.

3ಯೆಹೋಶುವನು ''ಆಯಿ''ಯ ಮೇಲೆ
ಆಕ್ರಮಣಮಾಡಲು ಸೈನ್ಯಸಮೇತವಾಗಿ ಹೋದರು.
ಮೂವತ್ತು ಸಾವಿರ ಯುದ್ಧವೀರರನ್ನು ಆರಿಸಿಕೊಂಡನು.
4ಯೆಹೋಶುವನು ಅವರಿಗೆ, ''ಗಮನಕೊಟ್ಟು ಕೇಳಿರಿ.
ನೀವು ನಗರದ ಹಿಂಭಾಗದ ಸ್ಥಳದಲ್ಲಿ ಅಡಗಿಕೊಂಡಿದ್ದು
ಆಕ್ರಮಣಮಾಡಲು ಸಿದ್ಧರಾಗಿರಿ. ನಗರದಿಂದ ಬಹಳ
ದೂರ ಹೋಗಬೇಡಿರಿ. 5ನಾನು ನನ್ನ ಸಂಗಡವಿರುವ ಜನ
ರನ್ನು ಕರೆದುಕೊಂಡು ಪಟ್ಟಣದ ಕಡೆಗೆ ಹೋಗುತ್ತೇನೆ.
ಪಟ್ಟಣದೊಳಗಿರುವ ಜನರು ನಮ್ಮ ಸಂಗಡ ಕಾದಾಡಲು
ಹೊರಗೆ ಬರುತ್ತಾರೆ. ನಾವು ಮುಂಚಿನಂತೆ ಹಿಂತಿರುಗಿ
ಅಲ್ಲಿಂದ ಓಡುತ್ತೇವೆ. 6ಅವರು ನಗರದಿಂದ ನಮ್ಮನ್ನು
ಬೆನ್ನಟ್ಟಿಕೊಂಡು ಬರುತ್ತಾರೆ. ನಾವು ಮುಂಚಿನಂತೆ ಅವರ
ಮುಂದೆ ಸೋತು ಓಡಿಹೋಗುತ್ತಿದ್ದೇವೆ ಎಂದು ಅವರು
ತಿಳಿದುಕೊಳ್ಳುತ್ತಾರೆ. ಹೀಗೆ ನಾವು ಬಹುದೂರ ಓಡಿ
ಹೋದಾಗ 7ನೀವು ಯಾವ ಸ್ಥಳದಲ್ಲಿ ಅಡಗಿಕೊಂಡಿ
ದ್ದೀರೋ ಆ ಸ್ಥಳದಿಂದ ಹೊರಬಂದು ಪಟ್ಟಣವನ್ನು
ಸ್ವಾಧೀನಪಡಿಸಿಕೊಳ್ಳಬೇಕು. ನಿಮ್ಮ ದೇವರಾದ
ಯೆಹೋವನು ನಿಮಗೆ ಗೆಲ್ಲುವ ಸಾಮರ್ಥ್ಯವನ್ನು ದಯ
ಪಾಲಿಸುತ್ತಾನೆ.

8''ಯೆಹೋವನು ಹೇಳಿದಂತೆಯೇ ನೀವು ಮಾಡ
ಬೇಕು. ನೀವು ಪಟ್ಟಣವನ್ನು ಸ್ವಾಧೀನಪಡಿಸಿಕೊಂಡ
ಮೇಲೆ ಅದನ್ನು ಸುಟ್ಟುಹಾಕಬೇಕು. ನನ್ನ ಕಡೆಗೆ ಗಮನ
ವಿರಲಿ! ಆಕ್ರಮಣ ಮಾಡುವುದಕ್ಕೆ ನಾನು ಆಜ್ಞೆಯನ್ನು
ಕೊಡುತ್ತೇನೆ'' ಎಂದು ಆಜ್ಞಾಪಿಸಿದನು.

9ಬಳಿಕ ಯೆಹೋಶುವನು ಅವರನ್ನು ಅವರು ಅಡಗಿ
ಕೊಳ್ಳಬೇಕಾದ ಸ್ಥಳಕ್ಕೆ ಕಳುಹಿಸಿದನು.

ಅವರು ''ಬೇತೇಲ್'' ಮತ್ತು ''ಆಯಿ''ಯ ಮಧ್ಯ
ದಲ್ಲಿದ್ದ ಒಂದು ಸ್ಥಳಕ್ಕೆ ಹೋದರು. ಇದು ಆಯಿಯ
ಪಶ್ಚಿಮಕ್ಕಿತ್ತು. ಯೆಹೋಶುವನು ತನ್ನ ಜನರೊಂದಿಗೆ ಆ
ರಾತ್ರಿ ಅಲ್ಲಿಯೇ ಇದ್ದನು.

10ಮರುದಿನ ಬೆಳಿಗ್ಗೆ ಯೆಹೋಶುವನು ಎಲ್ಲ ಜನರನ್ನು
ಒಂದು ಕಡೆ ಬೇಗನೆ ಸೇರಿಸಿದನು. ಆಮೇಲೆ ಯೆಹೋಶು
ವನು ಮತ್ತು ಇಸ್ರೇಲಿನ ನಾಯಕರು ಜನರನ್ನು
''ಆಯಿ''ಗೆ ಮುನ್ನಡೆಸಿದರು. 11ಅವನ ಜೊತೆಗಿದ್ದ ಎಲ್ಲ
ಸೈನಿಕರು ''ಆಯಿ''ಯ ಕಡೆಗೆ ಹೋದರು. ಅವರು
ನಗರದ ಮುಂದುಗಡೆ ನಿಂತರು. ಸೈನ್ಯವು ನಗರದ ಉತ್ತರ
ದಿಕ್ಕಿನಲ್ಲಿಳಿದುಕೊಂಡಿತು. ಈ ಸೈನ್ಯ ಮತ್ತು ''ಆಯಿ''
ಪಟ್ಟಣದ ನಡುವೆ ಒಂದು ಕಣಿವೆ ಇತ್ತು.

12ಆಗ ಯೆಹೋಶುವನು ಸುಮಾರು ಐದು ಸಾವಿರ ಜನ
ರನ್ನು ಆರಿಸಿ ಪಟ್ಟಣದ ಪಶ್ಚಿಮದಲ್ಲಿರುವ ''ಬೇತೇಲ್''
ಮತ್ತು ''ಆಯಿ''ಯ ಮಧ್ಯದಲ್ಲಿರುವ ಕ್ಷೇತ್ರದಲ್ಲಿ
ಅಡಗಿಕೊಳ್ಳಲು ಕಳುಹಿಸಿಕೊಟ್ಟನು. 13ಯೆಹೋಶುವನು
ತನ್ನ ಜನರನ್ನು ಯುದ್ಧಕ್ಕೆ ಸಿದ್ಧಗೊಳಿಸಿದ್ದನು. ಮುಖ್ಯ
ಪಾಳೆಯವು ಪಟ್ಟಣದ ಉತ್ತರ ದಿಕ್ಕಿನಲ್ಲಿತ್ತು. ಉಳಿದ
ಜನರು ಪಶ್ಚಿಮದಲ್ಲಿ ಅಡಗಿಕೊಂಡಿದ್ದರು. ಆ ರಾತ್ರಿ
ಯೆಹೋಶುವನು ಕಣಿವೆಗೆ ಹೋದನು.

14ತರುವಾಯ ''ಆಯಿ''ಯ ಅರಸನು ಇಸ್ರೇಲರ
ಸೈನ್ಯವನ್ನು ನೋಡಿದನು. ಅರಸನು ಮತ್ತು ಅವನ ಜನರು
ಇಸ್ರೇಲರ ಸೈನ್ಯದೊಂದಿಗೆ ಯುದ್ಧಮಾಡಿ ಮುಗಿಸು
ವದಕ್ಕಾಗಿ ತ್ವರೆಮಾಡಿ ಹೊರಟರು. ''ಆಯಿ''ಯ
ಅರಸನು ಪಟ್ಟಣದ ಪೂರ್ವಕ್ಕೆ ಹೋದನು. ಆದ್ದರಿಂದ
ಅವನು ಪಟ್ಟಣದ ಹಿಂಭಾಗದಲ್ಲಿ ಅಡಗಿದ್ದ ಸೈನಿಕರನ್ನು
ನೋಡಲಿಲ್ಲ.

15ಯೆಹೋಶುವನು ಮತ್ತು ಇಸ್ರೇಲರ ಎಲ್ಲ ಜನರು
''ಆಯಿ''ಯ ಸೈನ್ಯವು ತಮ್ಮನ್ನು ಹಿಮ್ಮೆಟ್ಟುವದಕ್ಕೆ
ಅವಕಾಶ ಮಾಡಿಕೊಟ್ಟರು. ಯೆಹೋಶುವನು ಮತ್ತು
ಅವನ ಜನರು ಪೂರ್ವಕ್ಕೆ ಮರುಭೂಮಿಯ ಕಡೆಗೆ
ಓಡಲು ಪ್ರಾರಂಭಿಸಿದರು. 16ಯೆಹೋಶುವನನ್ನು ಮತ್ತು
ಅವನ ಜನರನ್ನು ಬೆನ್ನಟ್ಟಲು ''ಆಯಿ'' ಪಟ್ಟಣದಲ್ಲಿದ್ದ
ಗಂಡಸರನ್ನೆಲ್ಲ ಕರೆಸಲಾಯಿತು. ಎಲ್ಲ ಜನರು ಪಟ್ಟಣ
ವನ್ನು ಬಿಟ್ಟರು. 17''ಆಯಿ'' ಮತ್ತು ಬೇತೇಲಿನ ಎಲ್ಲ
ಜನರು ಇಸ್ರೇಲಿನ ಸೈನ್ಯವನ್ನು ಬೆನ್ನಟ್ಟಿದರು. ಪಟ್ಟಣದ
ಬಾಗಿಲನ್ನು ತೆರೆದಿಟ್ಟಿದ್ದರು; ಒಬ್ಬನಾದರೂ ಪಟ್ಟಣದ
ರಕ್ಷಣೆಗೆ ಉಳಿದಿರಲಿಲ್ಲ.

18ಆಗ ಯೆಹೋವನು ಯೆಹೋಶುವನಿಗೆ, ''ನಿನ್ನ
ಈಟಿಯನ್ನು 'ಆಯಿ' ಯ ಕಡೆಗೆ ಚಾಚು, ಆ ಪಟ್ಟಣವನ್ನು
ನಾನು ನಿಮಗೆ ಕೊಟ್ಟಿದ್ದೇನೆ'' ಎಂದನು. ಯೆಹೋಶು
ವನು ತನ್ನ ಈಟಿಯನ್ನು 'ಆಯಿ'ಯ ಕಡೆಗೆ ಚಾಚಿದನು.
19ಅಡಗಿಕೊಂಡಿದ್ದ ಇಸ್ರೇಲಿನ ಜನರು ಇದನ್ನು ನೋಡಿ
ಕೂಡಲೇ ತಾವು ಅಡಗಿದ್ದ ಸ್ಥಳದಿಂದ ಹೊರಬಂದು ವೇಗ
ವಾಗಿ ಪಟ್ಟಣದ ಕಡೆಗೆ ಧಾವಿಸಿದರು. ಅವರು ಪಟ್ಟಣ
ವನ್ನು ಪ್ರವೇಶಿಸಿ ಅದನ್ನು ಸ್ವಾಧೀನಪಡಿಸಿಕೊಂಡು ಅದಕ್ಕೆ
ಬೆಂಕಿ ಹಚ್ಚಿದರು.

20'ಆಯಿ'ಯ ಜನರು ಹಿಂತಿರುಗಿ ನೋಡಿದಾಗ ತಮ್ಮ
ಪಟ್ಟಣ ಉರಿಯುತ್ತಿರುವುದನ್ನೂ ಹೊಗೆಯು ಆಕಾಶಕ್ಕೆ
ಏರುತ್ತಿರುವುದನ್ನೂ ಕಂಡು ತಮ್ಮ ಶಕ್ತಿಯನ್ನೂ ಧೈರ್ಯ
ವನ್ನೂ ಕಳೆದುಕೊಂಡರು. ಅವರು ಇಸ್ರೇಲಿನ ಜನರ
ಬೆನ್ನಟ್ಟುವುದನ್ನು ಬಿಟ್ಟರು. ಇಸ್ರೇಲರು ಜನರು ಓಡಿ
ಹೋಗುವುದನ್ನು ನಿಲ್ಲಿಸಿ'ಆಯಿ'ಯ ಜನರೊಂದಿಗೆ
ಹೋರಾಡತೊಡಗಿದರು. 'ಆಯಿ'ಯ ಜನರಿಗೆ ಓಡಿ
ಹೋಗಲು ಸುರಕ್ಷಿತವಾದ ಯಾವ ಸ್ಥಳವೂ ಇರಲಿಲ್ಲ.
21ಯೆಹೋಶುವನು ಮತ್ತು ಅವನ ಜನರು, ತಮ್ಮ ಸೈನ್ಯವು
ಪಟ್ಟಣವನ್ನು ಸ್ವಾಧೀನಪಡಿಸಿಕೊಂಡದ್ದನ್ನು ನೋಡಿ
ದರು. ಅವರು ಪಟ್ಟಣದಿಂದ ಏಳುತ್ತಿರುವ ಹೊಗೆಯನ್ನು
ನೋಡಿದರು. ಆಗ ಅವರು ಓಡಿಹೋಗುವುದನ್ನು ನಿಲ್ಲಿಸಿ
'ಆಯಿ' ಜನರೊಂದಿಗೆ ಹೋರಾಡಲು ಬಂದರು. 22ಆಗ

ಅಡಗಿಕೊಂಡಿದ್ದ ಜನರು ಯುದ್ಧದಲ್ಲಿ ಸಹಾಯ
ಮಾಡಲು ಪಟ್ಟಣದಿಂದ ಹೊರಬಂದರು. ಇಸ್ರೇಲಿನ
ಸೈನ್ಯವು 'ಆಯಿ'ಯ ಜನರ ಎರಡು ಕಡೆಗೂ ಇತ್ತು.
'ಆಯಿ' ಯ ಜನರು ಸಿಕ್ಕಿಬಿದ್ದರು. ಇಸ್ರೇಲರು ಅವರನ್ನು
ಸೋಲಿಸಿ ಅವರಲ್ಲಿ ಒಬ್ಬರನ್ನೂ ಜೀವಂತವಾಗಿ ಉಳಿಸ
ಲಿಲ್ಲ. ಅವರಲ್ಲಿ ಒಬ್ಬನಾದರೂ ತಪ್ಪಿಸಿಕೊಳ್ಳಲಾಗಲಿಲ್ಲ.
23ಆದರೆ 'ಆಯಿ'ಯ ಅರಸನನ್ನು ಜೀವಸಹಿತ ಉಳಿಸಿ
ಯೆಹೋಶುವನ ಬಳಿಗೆ ತಂದರು.

### ಯುದ್ಧದ ಪುನರಾವಲೋಕನ

24ಯುದ್ಧದಲ್ಲಿ ಇಸ್ರೇಲರು 'ಆಯಿ' ಯ ಜನರನ್ನು
ಬೆನಟ್ಟಿ ಬಯಲುಗಳಲ್ಲಿಯೂ ಅರಣ್ಯದಲ್ಲಿಯೂ
ಕೊಂದುಹಾಕಿದರು. ಬಳಿಕ ಇಸ್ರೇಲರು 'ಆಯಿ'ಗೆ
ಹಿಂತಿರುಗಿ ಪಟ್ಟಣದಲ್ಲಿ ಜೀವಸಹಿತ ಉಳಿದಿದ್ದ ಎಲ್ಲರನ್ನು
ಕೊಂದುಹಾಕಿದರು. 25'ಆಯಿ'ಯ ಜನರೆಲ್ಲಾ ಆ ದಿನ
ಸತ್ತುಹೋದರು. ಅಲ್ಲಿ ಹನ್ನೆರಡು ಸಾವಿರ ಗಂಡಸರು
ಮತ್ತು ಹೆಂಗಸರು ಇದ್ದರು. 26ಆ ಪಟ್ಟಣವನ್ನು ನಾಶ
ಮಾಡಲು ಸೂಚಿಸುವ ಸಂಕೇತದಂತೆ ಯೆಹೋಶುವನು
ತನ್ನ ಈಟಿಯನ್ನು 'ಆಯಿ'ಯ ಕಡೆಗೆ ಚಾಚಿದನು. ಆ
ಪಟ್ಟಣದ ಜನರೆಲ್ಲರೂ ನಾಶವಾಗುವವರೆಗೆ ಯೆಹೋಶು
ವನು ತನ್ನ ಈಟಿಯನ್ನು ಹಿಂದೆಗೆಯಲಿಲ್ಲ. 27ಆ ಪಟ್ಟಣ
ನಿವಾಸಿಗಳ ಸ್ವತ್ತಾಗಿದ್ದ ಪಶುಗಳನ್ನು ಮತ್ತು ವಸ್ತುಗಳನ್ನು
ಇಸ್ರೇಲಿನ ಜನರು ತಮಗಾಗಿ ಇಟ್ಟುಕೊಂಡರು. ಅವು
ಗಳನ್ನು ಇಟ್ಟುಕೊಳ್ಳಲು ಯೆಹೋವನು ಯೆಹೋಶು
ವನಿಗೆ ಅಪ್ಪಣೆ ಕೊಟ್ಟಿದ್ದನು.
28ಅನಂತರ ಯೆಹೋಶುವನು'ಆಯಿ' ನಗರವನ್ನು
ಸುಟ್ಟುಹಾಕಿದನು. ಆ ನಗರವು ಕೇವಲ ಕಲ್ಲುಬಂಡೆಗಳ
ದಿಬ್ಬವಾಯಿತು. ಅದು ಇಂದಿಗೂ ಹಾಗೆಯೇ ಇದೆ.
29ಯೆಹೋಶುವನು 'ಆಯಿ'ಯ ಅರಸನನ್ನು ಒಂದು
ಮರಕ್ಕೆ ಸಾಯಂಕಾಲದವರೆಗೂ ನೇತುಹಾಕಿದನು.
ಸೂರ್ಯನು ಮುಳುಗಿದ ಮೇಲೆ, ಯೆಹೋಶುವನು ಆ
ಅರಸನ ಶವವನ್ನು ಮರದಿಂದ ಕೆಳಗಿಳಿಸಿ ನಗರದ
ದ್ವಾರದಲ್ಲಿ ಬಿಸಾಡಿ ಅದರ ಮೇಲೆ ಕಲ್ಲಿನ ದೊಡ್ಡ ಕುಪ್ಪೆ
ಮಾಡಿಸಿದನು. ಅದು ಇಂದಿನವರೆಗೂ ಹಾಗೆಯೇ ಇದೆ.

### ಆಶೀರ್ವಾದಗಳ ಮತ್ತು ಶಾಪಗಳ ವಾಚನ

30ಆಗ ಇಸ್ರೇಲಿನ ದೇವರಾದ ಯೆಹೋವನಿಗಾಗಿ
ಯೆಹೋಶುವನು ಒಂದು ಯಜ್ಞವೇದಿಕೆಯನ್ನು
ಏಬಾಲ್ ಬೆಟ್ಟದ ಮೇಲೆ ಕಟ್ಟಿಸಿದನು. 31ಯಜ್ಞವೇದಿಕೆ
ಯನ್ನು ಹೇಗೆ ಕಟ್ಟಬೇಕೆಂಬುದನ್ನುಯೆಹೋವನ
ಸೇವಕನಾದ ಮೋಶೆಯು ಇಸ್ರೇಲರಿಗೆ ಹೇಳಿಕೊಟ್ಟಿ
ದ್ದನು. ಆದುದರಿಂದ ಮೋಶೆಯ ಧರ್ಮಶಾಸ್ತ್ರದ ಗ್ರಂಥ
ದಲ್ಲಿ ವಿವರಿಸಿದಂತೆ ಯೆಹೋಶುವನು ಯಜ್ಞವೇದಿಕೆ
ಯನ್ನು ಕಟ್ಟಿಸಿದನು. ಯಜ್ಞವೇದಿಕೆಯನ್ನು ಕಡಿಯದ
ಕಲ್ಲುಗಳಿಂದ ಮಾಡಲಾಯಿತು. ಆ ಕಲ್ಲುಗಳ ಮೇಲೆ
ಯಾವ ಉಪಕರಣವನ್ನೂ ಉಪಯೋಗಿಸಿರಲಿಲ್ಲ.
ಯೆಹೋವನಿಗೆ ಆ ಯಜ್ಞವೇದಿಕೆಯ ಮೇಲೆ ಸರ್ವಾಂಗ
ಹೋಮಗಳನ್ನೂ ಸಮಾಧಾನ ಯಜ್ಞಗಳನ್ನೂ
ಅರ್ಪಿಸಿದರು.
32ಆ ಸ್ಥಳದಲ್ಲಿ ಯೆಹೋಶುವನು ಮೋಶೆಯ ಧರ್ಮ
ಶಾಸ್ತ್ರವನ್ನು ಕಲ್ಲಿನ ಹಲಗೆಗಳ ಮೇಲೆ ಬರೆಸಿದನು.
ಇಸ್ರೇಲರೆಲ್ಲರೂ ಅದನ್ನು ನೋಡಬೇಕೆಂಬುದೇ ಅದರ
ಉದ್ದೇಶವಾಗಿತ್ತು. 33ಹಿರಿಯರು, ಅಧಿಕಾರಿಗಳು,
ನ್ಯಾಯಾಧೀಶರು ಮತ್ತು ಇಸ್ರೇಲರೆಲ್ಲರು ಪವಿತ್ರ
ಪೆಟ್ಟಿಗೆಯ ಸುತ್ತಲೂ ನಿಂತುಕೊಂಡಿದ್ದರು. ಯೆಹೋವನ
ಒಡಂಬಡಿಕೆಯ ಪವಿತ್ರ ಪೆಟ್ಟಿಗೆಯನ್ನು ಹೊತ್ತುತಂದ
ಲೇವಿಯರ ಎದುರುಗಡೆ ಅವರು ನಿಂತುಕೊಂಡಿದ್ದರು.
ಅರ್ಧ ಜನರು ಏಬಾಲ್ ಬೆಟ್ಟದ ಎದುರಿಗೂ ಮತ್ತು
ಇನ್ನುಳಿದ ಅರ್ಧ ಜನರು ಗೆರಿಜ್ಜೀಮ್ ಬೆಟ್ಟದ ಎದು
ರಿಗೂ ನಿಂತುಕೊಂಡಿದ್ದರು. ಆಶೀರ್ವಾದವನ್ನು ಹೊಂದಿ
ಕೊಳ್ಳಲು ಹೀಗೆ ಮಾಡಬೇಕೆಂದು ಯೆಹೋವನ
ಸೇವಕನಾದ ಮೋಶೆಯು ಜನರಿಗೆ ಹೇಳಿದ್ದನು.
34ಆಗ ಯೆಹೋಶುವನು ಧರ್ಮಶಾಸ್ತ್ರದ ಎಲ್ಲಾ
ವಾಕ್ಯಗಳನ್ನು ಓದಿದನು. ಯೆಹೋಶುವನು ಆಶೀರ್ವಾದ
ಗಳನ್ನು ಮತ್ತು ಶಾಪದ ವಾಕ್ಯಗಳನ್ನು ಧರ್ಮಶಾಸ್ತ್ರದಲ್ಲಿ
ಬರೆದಿರುವಂತೆಯೇ ಓದಿದನು. 35ಅಲ್ಲಿ ಇಸ್ರೇಲಿನ ಎಲ್ಲ
ಜನರು ಸೇರಿಬಂದಿದ್ದರು. ಎಲ್ಲ ಹೆಂಗಸರು ಮತ್ತು
ಮಕ್ಕಳು ಮತ್ತು ಇಸ್ರೇಲಿನ ಜನರೊಂದಿಗೆ ಇದ್ದ ಎಲ್ಲ
ವಿದೇಶಿಯರು ಅಲ್ಲಿ ಇದ್ದರು. ಅವರೆಲ್ಲರಿಗೆ ಕೇಳಿಸುವಂತೆ
ಮೋಶೆಯು ಕೊಟ್ಟಿದ್ದ ಪ್ರತಿಯೊಂದು ಆಜ್ಞೆಯನ್ನು
ಯೆಹೋಶುವನು ಓದಿದನು.

### ಗಿಬ್ಯೋನ್ಯರು ಯೆಹೋಶುವನಿಗೆ ಮಾಡಿದ ಮೋಸ

9 ಜೋರ್ಡನ್ ನದಿಯ ಪಶ್ಚಿಮದ ಎಲ್ಲ ಅರಸರು ಈ
ವಿಷಯಗಳ ಬಗ್ಗೆ ಕೇಳಿದರು. ಇವರು ಹಿತ್ತಿಯರ,
ಅಮೋರಿಯರ, ಕಾನಾನ್ಯರ, ಪೆರಿಜ್ಜೀಯರ, ಹಿವ್ವಿಯರ,
ಯೆಬೂಸಿಯರ ರಾಜರಾಗಿದ್ದರು. ಅವರು ಬೆಟ್ಟಪ್ರದೇಶ
ಗಳಲ್ಲಿ ಮತ್ತು ಸಮತಲ ಪ್ರದೇಶಗಳಲ್ಲಿ ವಾಸವಾಗಿದ್ದರು.
ಅವರು ಭೂಮಧ್ಯ ಸಾಗರದ ತೀರ ಪ್ರದೇಶದಲ್ಲಿ,
ಲೆಬನೋನಿನವರೆಗೆ ಸಹ ವಾಸವಾಗಿದ್ದರು. 2ಈ ಎಲ್ಲ
ಅರಸರು ಒಂದು ಕಡೆ ಸೇರಿದರು. ಅವರು ಯೆಹೋಶು
ವನ ಮತ್ತು ಇಸ್ರೇಲರ ವಿರುದ್ಧ ಯುದ್ಧ ಮಾಡುವ
ಯೋಜನೆಗಳನ್ನು ಹಾಕಿಕೊಂಡರು.
3ಯೆಹೋಶುವನು ''ಜೆರಿಕೋ'' ಮತ್ತು ''ಆಯಿ''
ನಗರಗಳನ್ನು ಸ್ವಾಧೀನಪಡಿಸಿಕೊಂಡ ಬಗೆಯನ್ನು
ಗಿಬ್ಯೋನ್ ನಗರದ ಜನರು ಕೇಳಿದ್ದರು. 4ಇಸ್ರೇಲರಿಂದ

ತಮ್ಮನ್ನು ರಕ್ಷಿಸಿಕೊಳ್ಳಲು ಒಂದು ಉಪಾಯಮಾಡಿದರು.
ಅವರು ಹರುಕುಮುರುಕಾದ ಹಳೆಯ ದ್ರಾಕ್ಷಾರಸದ
ಬುದ್ದಲಿಗಳನ್ನು* ತಮ್ಮ ಪಶುಗಳ ಬೆನ್ನ ಮೇಲೆ
ಹೇರಿಸಿದರು; ತಾವು ಬಹುದೂರ ಪ್ರಯಾಣ ಮಾಡಿ
ಬಂದಿರುವುದಾಗಿ ತೋರಿಸಲು ತಮ್ಮ ಪಶುಗಳ ಮೇಲೆ
ಹಳೆಯ ಗೋಣಿಚೀಲಗಳನ್ನು ಹಾಕಿದರು. 5ಅವರು
ಹಳೆಯ ಪಾದರಕ್ಷೆಗಳನ್ನು ಮೆಟ್ಟಿಕೊಂಡರು; ಹಳೆಯ
ಬಟ್ಟೆಗಳನ್ನು ಧರಿಸಿಕೊಂಡರು; ಒಣಗಿದ ಮತ್ತು
ಕೆಟ್ಟುಹೋದ ರೊಟ್ಟಿಗಳನ್ನು ಕಟ್ಟಿಕೊಂಡರು. ಹೀಗೆ
ಅವರು ಬಹುದೂರ ಪ್ರಯಾಣಮಾಡಿ ಬಂದವರಂತೆ
ತೋರಿಸಿಕೊಂಡರು. 6ಅವರು ಇಸ್ರೇಲರ ಪಾಳೆಯಕ್ಕೆ
ಹೋದರು. ಈ ಪಾಳೆಯವು ಗಿಲ್ಗಾಲಿನ ಹತ್ತಿರ ಇತ್ತು.

ಅವರು ಯೆಹೋಶುವನ ಬಳಿಗೆ ಹೋಗಿ ಅವನಿಗೆ,
‘‘ನಾವು ಬಹುದೂರ ದೇಶದಿಂದ ಪ್ರಯಾಣ ಮಾಡಿ
ಬಂದಿದ್ದೇವೆ. ನಾವು ನಿಮ್ಮ ಜೊತೆ ಶಾಂತಿ ಒಪ್ಪಂದವನ್ನು
ಮಾಡಿಕೊಳ್ಳಲು ಇಚ್ಛಿಸುತ್ತೇವೆ’’ ಎಂದು ಹೇಳಿದರು.

7ಹಿವ್ವಿಯರಾದ ಅವರಿಗೆ ಇಸ್ರೇಲಿನ ಜನರು, ‘‘ಒಂದು
ವೇಳೆ ನೀವು ನಮ್ಮನ್ನು ಮೋಸಗೊಳಿಸಲು ಪ್ರಯತ್ನಿಸು
ತ್ತಿರಬಹುದು. ಒಂದು ವೇಳೆ ನೀವು ನಮ್ಮ ಹತ್ತಿರದ
ಲ್ಲಿಯೇ ವಾಸಮಾಡುತ್ತಿರಬಹುದು; ನೀವು ಎಲ್ಲಿಯವರು
ಎಂಬುದು ನಮಗೆ ಗೊತ್ತಾಗುವವರೆಗೆ ನಾವು ನಿಮ್ಮ
ಸಂಗಡ ಶಾಂತಿ ಒಪ್ಪಂದವನ್ನು ಮಾಡಿಕೊಳ್ಳಲು ಸಾಧ್ಯ
ವಿಲ್ಲ’’ ಎಂದು ಹೇಳಿದರು.

8ಹಿವ್ವಿಯರು ಯೆಹೋಶುವನಿಗೆ, ‘‘ನಾವು ನಿಮ್ಮ
ಸೇವಕರು’’ ಎಂದು ಹೇಳಿದರು.

ಆದರೆ ಯೆಹೋಶುವನು,‘‘ನೀವು ಯಾರು? ಎಲ್ಲಿಂದ
ಬಂದಿರುವಿರಿ?’’ ಎಂದು ಪ್ರಶ್ನಿಸಿದನು.

9ಅದಕ್ಕೆ ಅವರು, ‘‘ನಾವು ನಿಮ್ಮ ಸೇವಕರು. ನಾವು
ಬಹು ದೂರ ದೇಶದಿಂದ ಬಂದಿದ್ದೇವೆ. ನಾವು ಬಂದದ್ದಕ್ಕೆ
ಕಾರಣವೇನೆಂದರೆ ನಾವು ನಿಮ್ಮ ದೇವರಾದ
ಯೆಹೋವನ ಅದ್ಭುತಶಕ್ತಿಯ ಬಗ್ಗೆ ಕೇಳಿದೆವು. ಆತನು
ಮಾಡಿದ ಅದ್ಭುತಕಾರ್ಯಗಳ ಬಗ್ಗೆ ಕೇಳಿದೆವು. ಆತನು
ಈಜಿಪ್ಟಿನಲ್ಲಿ ಮಾಡಿದ ಪ್ರತಿಯೊಂದು ಅದ್ಭುತದ ಬಗ್ಗೆ
ಕೇಳಿದೆವು. 10ಆತನು ಜೋರ್ಡನ್ ನದಿಯ ಪೂರ್ವ
ದಲ್ಲಿರುವ ಅಮೋರಿಯರ ಇಬ್ಬರು ಅರಸರನ್ನು ಸೋಲಿಸಿ
ದ್ದನ್ನು ನಾವು ಕೇಳಿದೆವು. ಹೆಷ್ಬೋನಿನ ಅರಸನಾದ
ಸೀಹೋನ್ ಮತ್ತು ಅಷ್ಟರೋತಿನಲ್ಲಿ ವಾಸವಾಗಿದ್ದ
ಬಾಷಾನಿನ ಅರಸನಾದ ಓಗ್ ಇವರೇ ಆ ಅರಸರು.
11ಆದುದರಿಂದ ನಮ್ಮ ಹಿರಿಯರು ಮತ್ತು ನಮ್ಮ ಜನರು
ನಮಗೆ, ‘ನಿಮ್ಮ ಪ್ರಯಾಣಕ್ಕೆ ಸಾಕಷ್ಟು ಆಹಾರವನ್ನು
ತೆಗೆದುಕೊಂಡು ಹೋಗಿ ಇಸ್ರೇಲರನ್ನು ಭೇಟಿ
ಮಾಡಿ,‘‘ನಾವು ನಿಮ್ಮ ಸೇವಕರು. ನಮ್ಮ ಜೊತೆ ಶಾಂತಿ
ಒಪ್ಪಂದವನ್ನು ಮಾಡಿಕೊಳ್ಳಿರಿ’’ ಎಂದು ಅವರಿಗೆ ತಿಳಿಸಿ’
ಎಂಬುದಾಗಿ ಹೇಳಿ ನಮ್ಮನ್ನು ಕಳುಹಿಸಿದ್ದಾರೆ.

12‘‘ನಮ್ಮ ರೊಟ್ಟಿಯನ್ನು ನೋಡಿರಿ, ನಾವು ಮನೆ
ಯನ್ನು ಬಿಟ್ಟಾಗ ಬಿಸಿಯಾಗಿತ್ತು ಮತ್ತು ಮೃದುವಾಗಿತ್ತು.
ಆದರೆ ಈಗ ಅವುಗಳನ್ನು ನೋಡಿರಿ, ಒಣಗಿಹೋಗಿವೆ.
13ನಮ್ಮ ದ್ರಾಕ್ಷಾರಸದ ಬುದ್ದಲಿಗಳನ್ನು ನೋಡಿರಿ, ನಾವು
ಮನೆಯನ್ನು ಬಿಟ್ಟಾಗ ಅವು ಹೊಸದಾಗಿದ್ದವು ಮತ್ತು
ದ್ರಾಕ್ಷಾರಸದಿಂದ ತುಂಬಿದ್ದವು. ಆದರೆ ಈಗ ಹಳೆಯ
ದಾಗಿ ಹರಿದುಹೋಗಿವೆ. ನಮ್ಮ ಬಟ್ಟೆಗಳನ್ನು ಮತ್ತು
ಪಾದರಕ್ಷೆಗಳನ್ನು ನೋಡಿರಿ, ಈಗ ಅವು ದೂರ
ಪ್ರಯಾಣದಿಂದ ಹಾಳಾಗಿಹೋಗಿವೆ’’ ಎಂದು
ಹೇಳಿದರು.

14ಅವರು ಹೇಳುತ್ತಿರುವುದು ನಿಜವೇ ಎಂದು ತಿಳಿದು
ಕೊಳ್ಳಲು ಇಸ್ರೇಲರು ಅವರ ರೊಟ್ಟಿಯನ್ನು ತಿಂದು
ನೋಡಿದರು; ಆದರೆ ತಾವು ಏನು ಮಾಡಬೇಕೆಂದು
ಯೆಹೋವನನ್ನು ಕೇಳಲಿಲ್ಲ. 15ಯೆಹೋಶುವನು ಅವ
ರೊಂದಿಗೆ ಶಾಂತಿ ಒಪ್ಪಂದವನ್ನು ಮಾಡಿಕೊಳ್ಳಲು ಒಪ್ಪಿ
ಕೊಂಡನು. ಅವರು ಜೀವಸಹಿತ ಇರಲು ಅವಕಾಶ
ಮಾಡಿಕೊಟ್ಟನು. ಯೆಹೋಶುವನ ಈ ಒಪ್ಪಂದಕ್ಕೆ
ಇಸ್ರೇಲಿನ ಹಿರಿಯರು ಒಪ್ಪಿಕೊಂಡರು.

16ಮೂರು ದಿನಗಳ ತರುವಾಯ ಆ ಜನರು ತಮ್ಮ
ಪಾಳೆಯದ ಸಮೀಪ ವಾಸಿಸುವವರು ಎಂಬುದು
ಇಸ್ರೇಲರಿಗೆ ತಿಳಿದುಬಂತು. 17ಆದುದರಿಂದ ಇಸ್ರೇಲರು
ಅವರಿದ್ದ ಸ್ಥಳಕ್ಕೆ ಹೋದರು. ಮೂರನೆಯ ದಿನ
ಇಸ್ರೇಲರು ಗಿಬ್ಯೋನ್, ಕೆಫೀರಾ, ಬೇರೋತ್ ಮತ್ತು
ಕಿರ್ಯತ್ಯಾರೀಮ್ ಪಟ್ಟಣಗಳಿಗೆ ಬಂದರು. 18ಆದರೆ
ಇಸ್ರೇಲರ ಸೈನ್ಯವು ಆ ಪಟ್ಟಣದ ಜನರೊಂದಿಗೆ ಯುದ್ಧ
ಮಾಡಲಿಲ್ಲ. ಅವರು ಆ ಜನರೊಂದಿಗೆ ಶಾಂತಿ ಒಪ್ಪಂದ
ಮಾಡಿಕೊಂಡಿದ್ದರು. ಅವರು ಇಸ್ರೇಲಿನ ದೇವರಾದ
ಯೆಹೋವನ ಹೆಸರಿನಲ್ಲಿ ಪ್ರಮಾಣ ಮಾಡಿದ್ದರು.

ಒಪ್ಪಂದವನ್ನು ಮಾಡಿಕೊಂಡ ಜನನಾಯಕರ ಬಗ್ಗೆ
ಜನರೆಲ್ಲರೂ ಅಸಮಾಧಾನ ವ್ಯಕ್ತಪಡಿಸಿದರು. 19ಆದರೆ
ಜನನಾಯಕರು, ‘‘ನಾವು ಮಾತು ಕೊಟ್ಟಿದ್ದೇವೆ;
ಇಸ್ರೇಲಿನ ದೇವರಾದ ಯೆಹೋವನ ಮುಂದೆ ಪ್ರಮಾಣ
ಮಾಡಿದ್ದೇವೆ; ಈಗ ನಾವು ಅವರ ವಿರುದ್ಧ ಯುದ್ಧ
ಮಾಡಲು ಸಾಧ್ಯವಿಲ್ಲ. 20ನಾವು ಅವರನ್ನು ಜೀವಂತವಾಗಿ
ಉಳಿಸಲೇಬೇಕು. ನಾವು ಅವರಿಗೆ ಕೊಟ್ಟ ಮಾತನ್ನು
ಮೀರಿದರೆ ದೇವರ ಕೋಪಕ್ಕೆ ಗುರಿಯಾಗುತ್ತೇವೆ. 21ಆದ್ದ
ರಿಂದ ಅವರು ಜೀವಂತವಾಗಿ ಉಳಿಯಲಿ. ಆದರೆ ಅವರು
ನಮ್ಮ ಸೇವಕರಾಗಲಿ. ಅವರು ನಮಗಾಗಿ ಸೌದೆಯನ್ನು
ಕಡಿಯಲಿ ಮತ್ತು ನಮ್ಮೆಲ್ಲರಿಗಾಗಿ ನೀರು ತಂದುಹಾಕಲಿ’’

---

**ದ್ರಾಕ್ಷಾರಸದ ಬುದಲಿ** ಪ್ರಾಣಿಗಳ ಚರ್ಮದಿಂದ ಮಾಡಿದ ಚೀಲ. ತೀಕ್ಷ್ಣವಾದ ಮದ್ಯವನ್ನು ಹಾಕಿಡಲು ಉಪಯೋಗಿಸುತ್ತಿದ್ದರು.

ಎಂದು ಉತ್ತರಿಸಿದರು. ಹೀಗೆ ಜನನಾಯಕರು ಆ ಜನ
ರೊಂದಿಗೆ ಮಾಡಿಕೊಂಡ ಶಾಂತಿ ಒಪ್ಪಂದವನ್ನು
ಮುರಿಯಲಿಲ್ಲ.
22ಯೆಹೋಶುವನು ಗಿಬ್ಯೋನಿನ ಜನರನ್ನು ಕರೆದು,
‘‘ನೀವು ನಮಗೆ ಸುಳ್ಳು ಹೇಳಿದ್ದೇಕೆ? ನಿಮ್ಮ ನಾಡು ನಮ್ಮ
ಪಾಳೆಯದ ಹತ್ತಿರವೇ ಇತ್ತು. ಆದರೆ ನೀವು ನಿಮ್ಮನ್ನು
ದೂರದೇಶದವರು ಎಂದು ಹೇಳಿಕೊಂಡಿರಿ. 23ಈಗ
ನೀವು ಶಾಪಕ್ಕೆ ಗುರಿಯಾಗಿದ್ದೀರಿ. ದೇವರ ಮಂದಿರಕ್ಕಾಗಿ
ಸೌದೆಯನ್ನು ಕಡಿಯುವುದೂ ನೀರನ್ನು ಹೊರುವುದೂ
ನಿಮಗೆಂದಿಗೂ ತಪ್ಪಿದ್ದಿಲ್ಲ’’ ಎಂದು ಹೇಳಿದನು.
24ಗಿಬ್ಯೋನ್ಯರು, ‘‘ನೀವು ನಮ್ಮನ್ನು ಕೊಲ್ಲಬಹು
ದೆಂಬ ಭಯದಿಂದ ನಾವು ನಿಮಗೆ ಸುಳ್ಳು ಹೇಳಿದೆವು;
ದೇವರು ತನ್ನ ಸೇವಕನಾದ ಮೋಶೆಗೆ ಈ ಎಲ್ಲ ಭೂ
ಪ್ರದೇಶವನ್ನು ನಿಮಗೆ ಕೊಡಬೇಕೆಂದು ಆಜ್ಞಾಪಿಸಿರು
ವುದನ್ನೂ ಈ ಪ್ರದೇಶದ ಎಲ್ಲ ಜನರನ್ನು ಕೊಂದುಬಿಡ
ಬೇಕೆಂದು ನಿಮಗೆ ಹೇಳಿರುವನೆಂದೂ ನಾವು ಕೇಳಿದ್ದೆವು.
ಆದ್ದರಿಂದ ನಾವು ನಿಮಗೆ ಸುಳ್ಳು ಹೇಳಿದೆವು. 25ನಾವು
ಈಗ ನಿಮ್ಮ ಸೇವಕರು. ನಿಮಗೆ ಸರಿ ಎನಿಸಿದ್ದನ್ನು ನೀವು
ಮಾಡಬಹುದು’’ ಎಂದು ಉತ್ತರಿಸಿದರು.
26ಹೀಗೆ ಗಿಬ್ಯೋನಿನ ಜನರು ಗುಲಾಮರಾದರು.
ಆದರೆ ಯೆಹೋಶುವನು ಅವರನ್ನು ಜೀವಂತವಾಗಿ
ಉಳಿಸಿದನು. ಇಸ್ರೇಲರು ಅವರನ್ನು ಕೊಲ್ಲದಂತೆ ನೋಡಿ
ಕೊಂಡನು. 27ಯೆಹೋಶುವನು ಗಿಬ್ಯೋನಿನ ಜನರನ್ನು
ಇಸ್ರೇಲರ ಸೇವಕರನ್ನಾಗಿ ಮಾಡಿಕೊಂಡನು. ತನ್ನ ನಿವಾಸ
ಕ್ಕಾಗಿ ಯೆಹೋವನು ಆರಿಸಿಕೊಳ್ಳುವ ಸ್ಥಳಗಳಲ್ಲಿ ಅವರು
ಇಸ್ರೇಲರಿಗಾಗಿಯೂ ಯೆಹೋವನ ಯಜ್ಞವೇದಿಕೆ
ಗಾಗಿಯೂ ಮರವನ್ನು ಕಡಿಯುತ್ತಿದ್ದರು ಮತ್ತು ನೀರನ್ನು
ಹೊರುತ್ತಿದ್ದರು. ಆ ಜನರು ಇಂದಿಗೂ ಗುಲಾಮ
ರಾಗಿಯೇ ಇದ್ದಾರೆ.

## ಸೂರ್ಯನು ನಿಶ್ಚಲನಾಗಿ ನಿಂತ ದಿನ

10 ಈ ಸಮಯದಲ್ಲಿ ಅದೋನೀಚೆದೆಕನು ಜೆರುಸ
ಲೇಮಿನ ಅರಸನಾಗಿದ್ದನು. ಯೆಹೋಶುವನು
‘ಆಯಿ’ ಪಟ್ಟಣವನ್ನು ಸ್ವಾಧೀನಪಡಿಸಿಕೊಂಡ ಮತ್ತು
ಅದನ್ನು ಸಂಪೂರ್ಣವಾಗಿ ನಾಶಮಾಡಿದ ಸಂಗತಿಯನ್ನು
ಅವನು ಕೇಳಿದ್ದನು. ಜೆರಿಕೋ ಪಟ್ಟಣಕ್ಕೂ ಅದರ
ರಾಜನಿಗೂ ಯೆಹೋಶುವನು ಹಾಗೆಯೇ ಮಾಡಿದ್ದ
ನೆಂಬುದನ್ನೂ ಗಿಬ್ಯೋನಿನ ಜನರು ಇಸ್ರೇಲರೊಂದಿಗೆ
ಶಾಂತಿ ಒಪ್ಪಂದ ಮಾಡಿಕೊಂಡಿದ್ದಾರೆಂಬುದನ್ನೂ ಅವನು
ಕೇಳಿದ್ದನು. ಅವರು ಜೆರುಸಲೇಮಿಗೆ ಅತೀಸಮೀಪದಲ್ಲಿ
ವಾಸವಾಗಿದ್ದರು. 2ಆದುದರಿಂದ ಅದೋನೀಚೆದೆಕನು
ಮತ್ತು ಅವನ ಜನರು ಬಹಳ ಹೆದರಿಕೊಂಡರು.
ಗಿಬ್ಯೋನ್ ‘‘ಆಯಿ’’ಯಂತೆ ಸಣ್ಣ ಊರಾಗಿರಲಿಲ್ಲ.
ಗಿಬ್ಯೋನ್ ಬಹಳ ದೊಡ್ಡ ನಗರವಾಗಿತ್ತು. ಅದು
ರಾಜಧಾನಿಯಷ್ಟು ದೊಡ್ಡ ಪಟ್ಟಣವಾಗಿತ್ತು. ಆ ಪಟ್ಟಣದ
ಜನರೆಲ್ಲರೂ ಒಳ್ಳೆಯ ಯೋಧರಾಗಿದ್ದರು. ಆದ್ದರಿಂದ
ಆ ಅರಸನು ಭಯಗೊಂಡಿದ್ದನು. 3ಜೆರುಸಲೇಮಿನ ರಾಜ
ನಾದ ಅದೋನೀಚೆದೆಕನು ಹೆಬ್ರೋನಿನ ಅರಸನಾದ
ಹೋಹಾಮನೊಂದಿಗೆ ಮಾತನಾಡಿದನು. ಅವನು
ಯರ್ಮೂತಿನ ಅರಸನಾದ ಪಿರಾಮ್, ಲಾಕೀಷಿನ ಅರಸ
ನಾದ ಯಾಫೀಯ ಮತ್ತು ಎಗ್ಲೋನಿನ ಅರಸನಾದ
ದೆಬೀರ್ ಇವರೊಂದಿಗೂ ಮಾತನಾಡಿದನು. ಜೆರುಸ
ಲೇಮಿನ ಅರಸನು ಅವರಿಗೆ, 4‘‘ನನ್ನೊಂದಿಗೆ ಬಂದು
ಗಿಬ್ಯೋನ್‌ನ ಮೇಲೆ ದಾಳಿಮಾಡಲು ಸಹಾಯ
ಮಾಡಿರಿ. ಗಿಬ್ಯೋನ್ ಯೆಹೋಶುವನೊಂದಿಗೂ
ಇಸ್ರೇಲರೊಂದಿಗೂ ಶಾಂತಿ ಒಪ್ಪಂದ ಮಾಡಿಕೊಂಡಿದೆ’’
ಎಂದು ಬೇಡಿಕೊಂಡನು.
5ಆಗ ಆ ಐದು ಮಂದಿ ಅಮೋರಿಯರ ಅರಸರು ಸೈನ್ಯ
ವನ್ನು ಸೇರಿಸಿದರು. (ಜೆರುಸಲೇಮಿನ ಅರಸ,
ಹೆಬ್ರೋನಿನ ಅರಸ, ಯರ್ಮೂತಿನ ಅರಸ, ಲಾಕೀಷಿನ
ಅರಸ ಮತ್ತು ಎಗ್ಲೋನಿನ ಅರಸ; ಇವರೇ ಆ ಐದು ಮಂದಿ
ಅರಸರು.) ಆ ಸೈನ್ಯಗಳು ಗಿಬ್ಯೋನಿಗೆ ಹೋಗಿ
ಪಟ್ಟಣವನ್ನು ಸುತ್ತುವರಿದು ಅದರ ವಿರುದ್ಧ ಹೋರಾಟ
ಪ್ರಾರಂಭಿಸಿದವು.
6ಗಿಲ್ಗಾಲಿನ ಪಾಳೆಯದಲ್ಲಿದ್ದ ಯೆಹೋಶುವನಿಗೆ
ಗಿಬ್ಯೋನ್ ನಗರದ ಜನರು ಒಂದು ಸಂದೇಶವನ್ನು
ಕಳಿಸಿದರು. ಆ ಸಂದೇಶ ಹೀಗಿತ್ತು: ‘‘ನಾವು ನಿಮ್ಮ ಸೇವಕ
ರಾಗಿದ್ದೇವೆ, ನಮ್ಮನ್ನು ನಿಸ್ಸಹಾಯಕರಾಗಿ ಬಿಡಬೇಡಿರಿ.
ಬಂದು ನಮಗೆ ಸಹಾಯ ಮಾಡಿರಿ; ತ್ವರೆ ಮಾಡಿರಿ;
ನಮ್ಮನ್ನು ಉಳಿಸಿರಿ. ಬೆಟ್ಟಪ್ರದೇಶದ ಅಮೋರಿಯರ
ಅರಸರೆಲ್ಲಾ ತಮ್ಮ ಸೈನ್ಯವನ್ನು ಒಟ್ಟುಗೂಡಿಸಿ ನಮ್ಮ
ವಿರುದ್ಧ ಯುದ್ಧಮಾಡುತ್ತಿದ್ದಾರೆ.’’
7ಆದುದರಿಂದ ಯೆಹೋಶುವನು ತನ್ನ ಎಲ್ಲ ಸೈನ್ಯ
ದೊಂದಿಗೆ ಗಿಲ್ಗಾಲಿನಿಂದ ಹೊರಟನು. ಯೆಹೋಶುವ
ನೊಂದಿಗೆ ಅತ್ಯುತ್ತಮವಾದ ಯೋಧರಿದ್ದರು.
8ಯೆಹೋವನು ಯೆಹೋಶುವನಿಗೆ, ‘‘ಆ ಸೈನ್ಯಗಳಿಗೆ
ಹೆದರಬೇಡ, ನೀನು ಅವರನ್ನು ಸೋಲಿಸುವಂತೆ ಮಾಡು
ತ್ತೇನೆ. ಆ ಸೈನ್ಯದ ಯಾರೊಬ್ಬರೂ ನಿನ್ನನ್ನು ಸೋಲಿಸಲು
ಸಾಧ್ಯವಿಲ್ಲ’’ ಎಂದು ಹೇಳಿದನು.
9ಯೆಹೋಶುವನು ಮತ್ತು ಅವನ ಸೈನ್ಯದವರು ಇಡೀ
ರಾತ್ರಿ ಗಿಬ್ಯೋನಿನ ಕಡೆಗೆ ಪ್ರಯಾಣ ಮಾಡಿದರು.
ಯೆಹೋಶುವನು ಬರುತ್ತಿದ್ದಾನೆಂಬುದು ವೈರಿಗಳಿಗೆ
ಗೊತ್ತಿರಲಿಲ್ಲ. ಯೆಹೋಶುವನು ಅವರ ಮೇಲೆ ಧಾಳಿ
ಮಾಡಿದಾಗ ಅವರಿಗೆ ಅತ್ಯಾಶ್ಚರ್ಯವಾಯಿತು.
10ಇಸ್ರೇಲರು ಧಾಳಿಮಾಡಿದಾಗ ಯೆಹೋವನು ಆ
ಶತ್ರು ಸೈನ್ಯವನ್ನು ಗಾಬರಿಗೊಳಿಸಿದನು. ಆದುದರಿಂದ

ಇಸ್ರೇಲಿನ ಸೈನಿಕರು ಅವರನ್ನು ಸೋಲಿಸಿ ಮಹಾವಿಜಯ
ವನ್ನು ಸಾಧಿಸಿದರು. ಇಸ್ರೇಲರು ಶತ್ರುಗಳನ್ನು ಗಿಬ್ಯೋನಿ
ನಿಂದ ಬೇತ್‌ಹೋರೋನಿಗೆ ಹೋಗುವ ದಾರಿಯ
ವರೆಗೂ ಬೆನ್ನಟ್ಟಿದರು. ಇಸ್ರೇಲರು ಅಜೇಕ ಮತ್ತು
ಮಕ್ಕೇದದವರೆಗೆ ಅವರನ್ನು ಕೊಂದರು. 11ಬೇತ್
ಹೋರೋನ್ ಇಳಿಜಾರಿನಿಂದ ಅಜೇಕದವರೆಗೆ
ಅವರನ್ನು ಕೊಂದರು. ಅವರು ಶತ್ರುಗಳನ್ನು ಬೆನ್ನಟ್ಟು
ತ್ತಿದ್ದಾಗ ಯೆಹೋವನು ಆಕಾಶದಿಂದ ಆಲಿಕಲ್ಲು ಮಳೆ
ಸುರಿಯುವಂತೆ ಮಾಡಿದನು. ಬಹಳಷ್ಟು ಮಂದಿ ಶತ್ರು
ಗಳು ಈ ದೊಡ್ಡ ಆಲಿಕಲ್ಲುಗಳಿಂದಲೇ ಮೃತಪಟ್ಟರು.
ಇಸ್ರೇಲರು ತಮ್ಮ ಖಡ್ಗಗಳಿಂದ ಕೊಂದ ಜನರಿಗಿಂತ
ಹೆಚ್ಚು ಜನರು ಈ ಆಲಿಕಲ್ಲಿನ ಮಳೆಯಿಂದ ಸತ್ತರು.

12ಆ ದಿನ ಯೆಹೋವನ ಸಹಾಯದಿಂದ ಇಸ್ರೇಲರು
ಅಮೋರಿಯರನ್ನು ಸೋಲಿಸಿದರು. ಅಂದು ಯೆಹೋಶು
ವನು ಎಲ್ಲ ಜನರ ಎದುರಿಗೆ ನಿಂತುಕೊಂಡು ಯೆಹೋವ
ನಿಗೆ ಹೀಗೆ ಮೊರೆಯಿಟ್ಟನು:

> ''ಸೂರ್ಯನೇ, ಗಿಬ್ಯೋನಿನ ಆಕಾಶದಲ್ಲಿ
> ನಿಂತಿರು, ಚಲಿಸಬೇಡ. ಚಂದ್ರನೇ, ಅಯ್ಯಾ
> ಲೋನ್ ಕಣಿವೆಯ ಆಕಾಶದಲ್ಲಿ ನಿಂತಿರು,
> ಚಲಿಸಬೇಡ.''

13ಆದುದರಿಂದ ಅವರು ಶತ್ರುಗಳನ್ನು ಸೋಲಿಸು
ವವರೆಗೆ ಸೂರ್ಯನೂ ಚಲಿಸಲಿಲ್ಲ, ಚಂದ್ರನೂ ಚಲಿಸ
ಲಿಲ್ಲ. ಈ ಕಥೆಯು ಯಾಷಾರ್ ಗ್ರಂಥದಲ್ಲಿ ಬರೆಯ
ಲ್ಪಟ್ಟಿದೆ. ಸೂರ್ಯನು ಆಕಾಶದ ಮಧ್ಯದಲ್ಲಿ ನಿಂತನು.
ಅವನು ಇಡೀ ದಿನ ಚಲಿಸಲಿಲ್ಲ. 14ಆದಕ್ಕಿಂತ
ಮೊದಲೆಂದೂ ಹೀಗಾಗಿರಲಿಲ್ಲ; ಆಮೇಲೆಯೂ
ಆಗಲಿಲ್ಲ. ಯೆಹೋವನು ಒಬ್ಬ ಮಾನವನ ಆಜ್ಞೆಯನ್ನು
ಪಾಲಿಸಿದ ದಿನ ಅದಾಗಿತ್ತು. ಇಸ್ರೇಲರಿಗೋಸ್ಕರ
ಯೆಹೋವನು ನಿಜವಾಗಿಯೂ ಯುದ್ಧಮಾಡುತ್ತಿದ್ದನು.

15ಇದಾದ ಮೇಲೆ ಯೆಹೋಶುವನು ಮತ್ತು ಅವನ
ಸೈನಿಕರು ಗಿಲ್ಗಾಲಿನ ತಮ್ಮ ಪಾಳೆಯಕ್ಕೆ ಹಿಂದಿರುಗಿ
ಹೋದರು. 16ಯುದ್ಧನಡೆದಾಗ ಆ ಐದು ಮಂದಿ
ಅರಸರು ಓಡಿಹೋದರು. ಅವರು ಮಕ್ಕೇದದ ಸಮೀಪ
ದಲ್ಲಿದ್ದ ಗುಹೆಯಲ್ಲಿ ಅಡಗಿಕೊಂಡರು. 17ಆ ಐದು
ಮಂದಿ ಅರಸರು ಆ ಗುಹೆಯಲ್ಲಿ ಅಡಗಿಕೊಂಡಿದ್ದನ್ನು
ಯಾರೋ ನೋಡಿ ಯೆಹೋಶುವನಿಗೆ ತಿಳಿಸಿದರು.
18ಯೆಹೋಶುವನು ತನ್ನ ಜನರಿಗೆ,''ಗುಹೆಯ ದ್ವಾರ
ವನ್ನು ದೊಡ್ಡ ಕಲ್ಲುಬಂಡೆಗಳಿಂದ ಮುಚ್ಚಿರಿ. ಗುಹೆಗಳನ್ನು
ಕಾಯುವುದಕ್ಕೆ ಕೆಲವು ಜನರು ಇಲ್ಲಿರಲಿ. 19ಆದರೆ ನೀವು
ಅಲ್ಲಿ ನಿಂತುಕೊಳ್ಳಬೇಡಿರಿ; ಶತ್ರುಗಳನ್ನು ಬೆನ್ನಟ್ಟಿ ಅವರ
ಮೇಲೆ ಧಾಳಿಮಾಡಿ. ತಮ್ಮ ಪಟ್ಟಣಕ್ಕೆ ಸುರಕ್ಷಿತವಾಗಿ
ಸೇರಲು ಅವರಿಗೆ ಅವಕಾಶಕೊಡಬೇಡಿ. ನಿಮ್ಮ ದೇವ
ರಾದ ಯೆಹೋವನು ನಿಮಗೆ ಅವರ ಮೇಲೆ ಜಯವನ್ನು
ಅನುಗ್ರಹಿಸಿದ್ದಾನೆ''ಎಂದು ಆಜ್ಞಾಪಿಸಿದನು.

20ಯೆಹೋಶುವನು ಮತ್ತು ಇಸ್ರೇಲಿನ ಜನರು ವೈರಿ
ಗಳನ್ನು ಕೊಂದರು. ಆದರೆ ಕೆಲವು ಶತ್ರುಗಳು ಎತ್ತರವಾದ
ಗೋಡೆಗಳುಳ್ಳ ತಮ್ಮ ಪಟ್ಟಣಗಳಿಗೆ ಹೋಗಿ ಅಡಗಿ
ಕೊಳ್ಳಲು ಸಾಧ್ಯವಾಯಿತು. ಆ ಜನರು ಕೊಲ್ಲಲ್ಪಡಲಿಲ್ಲ.
21ಯುದ್ಧದ ತರುವಾಯ ಯೆಹೋಶುವನ ಜನರು ಅವನ
ಹತ್ತಿರ ಮಕ್ಕೇದಕ್ಕೆ ಬಂದರು. ಆ ದೇಶದಲ್ಲಿ ಇಸ್ರೇಲರ
ವಿರುದ್ಧ ಮಾತಾಡಲು ಯಾರಿಗೂ ಧೈರ್ಯವಿರಲಿಲ್ಲ.

22ಅನಂತರ ಯೆಹೋಶುವನು ಜನರಿಗೆ, ''ಗುಹೆಯ
ದ್ವಾರಕ್ಕೆ ಅಡ್ಡಲಾಗಿಟ್ಟ ಕಲ್ಲುಬಂಡೆಗಳನ್ನು ಸರಿಸಿ ಆ ಐದು
ಮಂದಿ ಅರಸರನ್ನು ನನ್ನ ಹತ್ತಿರ ತನ್ನಿರಿ'' ಎಂದು
ಆಜ್ಞಾಪಿಸಿದನು. 23ಯೆಹೋಶುವನ ಜನರು ಆ ಐದು
ಮಂದಿ ಅರಸರನ್ನು ಗುಹೆಯ ಹೊರಗಡೆ ತಂದರು.
ಜೆರುಸಲೇಮಿನ ಅರಸ, ಹೆಬ್ರೋನಿನ ಅರಸ,
ಯರ್ಮೂತಿನ ಅರಸ, ಲಾಕೀಷಿನ ಅರಸ, ಎಗ್ಲೋನಿನ
ಅರಸ ಇವರೇ ಆ ಐದು ಮಂದಿ. 24ಅವರು ಆ ಐದು
ಮಂದಿ ಅರಸರನ್ನು ಯೆಹೋಶುವನಲ್ಲಿಗೆ ತಂದರು.
ಯೆಹೋಶುವನು ಇಸ್ರೇಲರನ್ನೆಲ್ಲ ಆ ಸ್ಥಳಕ್ಕೆ ಕರೆಸಿ ತನ್ನ
ಸೈನ್ಯದ ಅಧಿಕಾರಿಗಳಿಗೆ ''ಇಲ್ಲಿಗೆ ಬನ್ನಿ, ನಿಮ್ಮ ಪಾದಗಳನ್ನು
ಈ ಅರಸರ ಕುತ್ತಿಗೆಗಳ ಮೇಲೆ ಇಡಿ'' ಎಂದು ಹೇಳಿದನು.
ಯೆಹೋಶುವನ ಸೈನ್ಯಾಧಿಕಾರಿಗಳು ಹತ್ತಿರಕ್ಕೆ ಬಂದು
ತಮ್ಮ ಪಾದಗಳನ್ನು ಆ ಅರಸರ ಕತ್ತುಗಳ ಮೇಲೆ ಇಟ್ಟರು.

25ಆಗ ಯೆಹೋಶುವನು ತನ್ನ ಜನರಿಗೆ, ''ಸ್ಥಿರಚಿತ್ತ
ರಾಗಿರಿ, ಧೈರ್ಯದಿಂದಿರಿ, ಅಂಜಬೇಡಿರಿ, ಇನ್ನು ಮುಂದೆ
ನಮ್ಮ ಜೊತೆ ಹೋರಾಡುವ ಎಲ್ಲ ಶತ್ರುಗಳಿಗೆ
ಯೆಹೋವನು ಏನು ಮಾಡುತ್ತಾನೆಂಬುದನ್ನು ನಿಮಗೆ
ತೋರಿಸುತ್ತೇನೆ'' ಎಂದು ಹೇಳಿದನು.

26ಆಮೇಲೆ ಯೆಹೋಶುವನು ಆ ಐದು ಮಂದಿ ಅರಸ
ರನ್ನು ಕೊಂದುಹಾಕಿದನು. ಅವರ ದೇಹಗಳನ್ನು ಐದು
ಮರಗಳಿಗೆ ಸಾಯಂಕಾಲದವರೆಗೂ ನೇತುಹಾಕಿದನು.
27ಸೂರ್ಯಾಸ್ತಮಾನದ ಹೊತ್ತಿಗೆ ಯೆಹೋಶುವನು ಆ
ದೇಹಗಳನ್ನು ಮರದಿಂದ ಕೆಳಗಿಳಿಸಲು ಹೇಳಿದನು.
ಆಮೇಲೆ ಅವರು ಎಲ್ಲಿ ಅಡಗಿಕೊಂಡಿದ್ದರೊ ಅದೇ ಗುಹೆ
ಯಲ್ಲಿ ಆ ಶವಗಳನ್ನು ಬಿಸಾಡಿದರು. ಆ ಗುಹೆಯ
ದ್ವಾರವನ್ನು ದೊಡ್ಡ ಕಲ್ಲುಬಂಡೆಗಳಿಂದ ಮುಚ್ಚಿದರು. ಆ
ದೇಹಗಳು ಇಂದಿಗೂ ಆ ಗುಹೆಯಲ್ಲಿವೆ.

28ಆ ದಿನ ಯೆಹೋಶುವನು ಮಕ್ಕೇದವನ್ನು ಸ್ವಾಧೀನ
ಪಡಿಸಿಕೊಂಡು ಆ ಪಟ್ಟಣದ ಅರಸನನ್ನು ಮತ್ತು ಜನರನ್ನು
ಸಂಹರಿಸಿದನು. ಒಬ್ಬರೂ ಜೀವಂತವಾಗಿ ಉಳಿಯಲಿಲ್ಲ.
ಯೆಹೋಶುವನು ಜೆರಿಕೋವಿನ ಅರಸನಿಗೆ ಮಾಡಿ
ದಂತೆಯೇ ಮಕ್ಕೇದದ ಅರಸನಿಗೂ ಮಾಡಿದನು.

### ದಕ್ಷಿಣದ ಪಟ್ಟಣಗಳನ್ನು ಸ್ವಾಧೀನ ಪಡಿಸಿಕೊಂಡದ್ದು

29 ಆಗ ಯೆಹೋಶುವನು ಮತ್ತು ಇಸ್ರೇಲರೆಲ್ಲರು
ಮಕ್ಕೇದದಿಂದ ಪ್ರಯಾಣ ಮಾಡಿ ಲಿಬ್ನಕ್ಕೆ ಹೋಗಿ ಆ
ಪಟ್ಟಣದ ಮೇಲೆ ದಾಳಿಮಾಡಿದರು. 30 ಇಸ್ರೇಲರು ಆ
ಪಟ್ಟಣವನ್ನು ಮತ್ತು ಅದರ ಅರಸನನ್ನು ಸ್ವಾಧೀನಪಡಿಸಿ
ಕೊಳ್ಳುವಂತೆ ಯೆಹೋವನು ಮಾಡಿದನು. ಅ ಪಟ್ಟಣದ
ಪ್ರತಿಯೊಬ್ಬ ವ್ಯಕ್ತಿಯನ್ನು ಇಸ್ರೇಲರು ಕೊಂದು
ಹಾಕಿದರು. ಒಬ್ಬರನ್ನೂ ಜೀವಸಹಿತ ಬಿಡಲಿಲ್ಲ. ಅವರು
ಜೆರಿಕೋ ನಗರದ ರಾಜನಿಗೆ ಮಾಡಿದಂತೆಯೇ ಆ
ರಾಜನಿಗೂ ಮಾಡಿದರು.

31 ಆಮೇಲೆ ಯೆಹೋಶುವನು ಮತ್ತು ಇಸ್ರೇಲರೆಲ್ಲರು
ಲಿಬ್ನವನ್ನು ಬಿಟ್ಟು ಲಾಕೀಷಿಗೆ ಹೋದರು. ಯೆಹೋಶು
ವನು ಮತ್ತು ಅವನ ಜನರು ಲಾಕೀಷಿಗೆ ಮುತ್ತಿಗೆ ಹಾಕಿ
ಅದರ ಮೇಲೆ ಧಾಳಿಮಾಡಿದರು. 32 ಇಸ್ರೇಲರ ಜನರು
ಲಾಕೀಷ್ ಪಟ್ಟಣವನ್ನು ವಶಪಡಿಸಿಕೊಳ್ಳುವಂತೆ
ಯೆಹೋವನು ಮಾಡಿದನು. ಅವರು ಎರಡನೆಯ ದಿನ
ಪಟ್ಟಣವನ್ನು ಸ್ವಾಧೀನಪಡಿಸಿಕೊಂಡರು. ಇಸ್ರೇಲರು ಆ
ಪಟ್ಟಣದಲ್ಲಿದ್ದವರನ್ನೆಲ್ಲಾ ಕೊಂದುಹಾಕಿದರು. ಅವರು
ಲಿಬ್ನ ಪಟ್ಟಣಕ್ಕೆ ಮಾಡಿದಂತೆ ಇದಕ್ಕೂ ಮಾಡಿದರು.
33 ಇದೇ ಸಮಯದಲ್ಲಿ ಗೆಜೆರಿನ ಅರಸನಾದ
ಹೋರಾಮನು ಲಾಕೀಷಿನವರ ಸಹಾಯಕ್ಕೆ ಬಂದನು.
ಯೆಹೋಶುವನು ಅವನನ್ನು ಮತ್ತು ಅವನ ಸೈನ್ಯವನ್ನು
ಸೋಲಿಸಿದನು. ಅಲ್ಲಿ ಯಾರನ್ನೂ ಜೀವಸಹಿತ ಬಿಡಲಿಲ್ಲ.

34 ಆಮೇಲೆ ಯೆಹೋಶುವನು ಮತ್ತು ಎಲ್ಲ ಇಸ್ರೇಲರು
ಲಾಕೀಷಿನಿಂದ ಎಗ್ಲೋನಿಗೆ ಪ್ರಯಾಣ ಮಾಡಿದರು.
ಅವರು ಎಗ್ಲೋನ್ ಪಟ್ಟಣಕ್ಕೆ ಮುತ್ತಿಗೆ ಹಾಕಿ ಅದರ
ಮೇಲೆ ಧಾಳಿಮಾಡಿದರು.

35 ಆ ದಿವಸ ಅವರು ಆ ನಗರವನ್ನು ಸ್ವಾಧೀನಪಡಿಸಿ
ಕೊಂಡು ಅಲ್ಲಿದ್ದ ಎಲ್ಲ ಜನರನ್ನು ಕೊಂದು ಹಾಕಿದರು.
ಅವರು ಲಾಕೀಷಿನಲ್ಲಿ ಮಾಡಿದಂತೆ ಇಲ್ಲಿಯೂ
ಮಾಡಿದರು.

36 ಆಮೇಲೆ ಯೆಹೋಶುವನು ಮತ್ತು ಎಲ್ಲ ಇಸ್ರೇಲರು
ಎಗ್ಲೋನಿನಿಂದ ಹೆಬ್ರೋನಿಗೆ ಪ್ರಯಾಣ ಮಾಡಿ
ಹೆಬ್ರೋನಿನ ಮೇಲೆ ದಾಳಿ ಮಾಡಿದರು. 37 ಅವರು
ಹೆಬ್ರೋನ್ ಪಟ್ಟಣವನ್ನೂ ಅದರ ರಾಜನನ್ನೂ ಮತ್ತು
ಅದರ ಸಮೀಪದಲ್ಲಿದ್ದ ಎಲ್ಲ ಸಣ್ಣಪುಟ್ಟ ಊರುಗಳನ್ನೂ
ಸ್ವಾಧೀನಪಡಿಸಿಕೊಂಡರು. ಇಸ್ರೇಲರು ಆ ಪಟ್ಟಣದಲ್ಲಿದ್ದ
ಎಲ್ಲರನ್ನೂ ಕೊಂದರು. ಅಲ್ಲಿ ಯಾರೊಬ್ಬರೂ ಜೀವಂತ
ವಾಗಿ ಉಳಿಯಲಿಲ್ಲ. ಅವರು ಎಗ್ಲೋನಿನಲ್ಲಿ ಮಾಡಿ
ದಂತೆಯೇ ಇಲ್ಲಿಯೂ ಮಾಡಿದರು. ಅವರು ಪಟ್ಟಣವನ್ನು
ನಾಶಮಾಡಿದರು ಮತ್ತು ಅಲ್ಲಿದ್ದ ಎಲ್ಲ ಜನರನ್ನು
ಕೊಂದರು.

38 ಆಮೇಲೆ ಯೆಹೋಶುವನು ಮತ್ತು ಎಲ್ಲ ಇಸ್ರೇಲರು
ದೆಬೀರಿಗೆ ಹೋಗಿ ಆ ಪಟ್ಟಣದ ಮೇಲೆ ದಾಳಿಮಾಡಿ
ದರು. 39 ಅವರು ಆ ಪಟ್ಟಣವನ್ನೂ ಅದರ ಅರಸ ನನ್ನೂ
ದೆಬೀರಿನ ಸಮೀಪದ ಎಲ್ಲ ಸಣ್ಣಪುಟ್ಟ ಊರುಗಳನ್ನೂ
ಸ್ವಾಧೀನಪಡಿಸಿಕೊಂಡರು. ಅವರು ಆ ಪಟ್ಟಣದಲ್ಲಿದ್ದ
ಎಲ್ಲರನ್ನು ಕೊಂದರು. ಅಲ್ಲಿ ಯಾರೊಬ್ಬರೂ ಸಜೀವ
ವಾಗಿ ಉಳಿಯಲಿಲ್ಲ. ಇಸ್ರೇಲರು ಹೆಬ್ರೋನ್ ಮತ್ತು
ಅದರ ಅರಸನಿಗೆ ಮಾಡಿದಂತೆಯೇ ದೆಬೀರ ಮತ್ತು ಅದರ
ಅರಸನಿಗೆ ಮಾಡಿದರು. ಲಿಬ್ನ ಮತ್ತು ಅದರ ಅರಸನಿಗೂ
ಹೀಗೆಯೇ ಮಾಡಲಾಗಿತ್ತು.

40 ಹೀಗೆ ಯೆಹೋಶುವನು ಬೆಟ್ಟದ ಮೇಲಿನ ಪ್ರದೇಶ,
ನೆಗೆವ್ ಪ್ರದೇಶ , ಪಶ್ಚಿಮದ ಇಳಕಲಿನ ಪ್ರದೇಶ,
ಪೂರ್ವದ ಇಳಕಲಿನ ಪ್ರದೇಶ ಈ ಎಲ್ಲ ಪ್ರದೇಶಗಳ
ಅರಸರನ್ನು ಸೋಲಿಸಿದನು. ಇಸ್ರೇಲಿನ ದೇವರಾದ
ಯೆಹೋವನು ಎಲ್ಲಾ ಜನರನ್ನು ಕೊಲ್ಲು ಎಂದು
ಯೆಹೋಶುವನಿಗೆ ಹೇಳಿದ್ದನು. ಅದಕ್ಕಾಗಿ ಯೆಹೋಶು
ವನು ಆ ಸ್ಥಳಗಳಲ್ಲಿ ಯಾರೊಬ್ಬರನ್ನೂ ಸಜೀವವಾಗಿ
ಉಳಿಸಲಿಲ್ಲ.

41 ಯೆಹೋಶುವನು ಕಾದೇಶ್‌ಬರ್ನೇಯದಿಂದ
ಗಾಜಾದವರೆಗಿನ ಎಲ್ಲ ಪಟ್ಟಣಗಳನ್ನು ಗೆದ್ದುಕೊಂಡನು.
ಅವನು ಗೋಷೆನ್ (ಈಜಿಪ್ಟಿನಲ್ಲಿ) ಪ್ರಾಂತದಿಂದ
ಗಿಬ್ಯೋನಿನವರೆಗೆ ಇದ್ದ ಎಲ್ಲ ಪಟ್ಟಣಗಳನ್ನು ಸ್ವಾಧೀನ
ಪಡಿಸಿಕೊಂಡನು. 42 ಯೆಹೋಶುವನು ಆ ಎಲ್ಲ ಪಟ್ಟಣ
ಗಳನ್ನು ಮತ್ತು ಅವುಗಳ ಅರಸರನ್ನು ಒಂದೇ ದಂಡೆ
ಯಾತ್ರೆಯಲ್ಲಿ ಸ್ವಾಧೀನಪಡಿಸಿಕೊಂಡನು. ಇಸ್ರೇಲಿನ
ದೇವರಾದ ಯೆಹೋವನು ಇಸ್ರೇಲಿನವರಿಗಾಗಿ ಯುದ್ಧ
ಮಾಡುತ್ತಿದ್ದುದರಿಂದ ಯೆಹೋಶುವನಿಗೆ ಇದು ಸಾಧ್ಯ
ವಾಯಿತು. 43 ಆಮೇಲೆ ಯೆಹೋಶುವನು ಮತ್ತು
ಇಸ್ರೇಲಿನ ಜನರೆಲ್ಲರು ಗಿಲ್ಗಾಲಿನಲ್ಲಿದ್ದ ತಮ್ಮ ಪಾಳೆಯಕ್ಕೆ
ಹಿಂತಿರುಗಿದರು.

### ಉತ್ತರದ ಪ್ರದೇಶಗಳನ್ನು ಸ್ವಾಧೀನ ಪಡಿಸಿಕೊಂಡದ್ದು

11 ಹಾಜೋರಿನ ಅರಸನಾದ ಯಾಬೀನನು ನಡೆದ
ಎಲ್ಲ ಸಂಗತಿಗಳ ಬಗ್ಗೆ ಕೇಳಿದನು. ಅದಕ್ಕಾಗಿ
ಅವನು ಅನೇಕ ಅರಸರ ಸೈನ್ಯಗಳನ್ನು ಒಟ್ಟಿಗೆ ಸೇರಿಸುವ
ನಿರ್ಧಾರವನ್ನು ಮಾಡಿದನು. ಮಾದೋನಿನ ರಾಜನಾದ
ಯೋಬಾಬನಿಗೆ, ಶಿಮ್ರೋನಿನ ಅರಸನಿಗೆ, ಅಕ್ಷಾಫಿನ
ಅರಸನಿಗೆ ಯಾಬೀನನು ಸಂದೇಶವನ್ನು ಕಳುಹಿಸಿದನು.
2 ಉತ್ತರದಿಕ್ಕಿನ ಪರ್ವತ ಪ್ರದೇಶಗಳಲ್ಲಿನ ಮತ್ತು
ಅರಣ್ಯದಲ್ಲಿನ ಅರಸರಿಗೂ ಕಿನ್ನೆರೋತ್, ನೆಗೆವ್ ಮತ್ತು
ಪಶ್ಚಿಮದ ಇಳಿಜಾರಿನ ಪ್ರದೇಶದ ಅರಸರಿಗೂ ಪಶ್ಚಿಮ

ದಿಕ್ಕಿನ ನೆಪತ್‌ದೋರ್ ರಾಜನಿಗೂ ಯಾಬೀನನು
ಸಂದೇಶವನ್ನು ಕಳುಹಿಸಿದನು. 3ಯಾಬೀನನು ಪೂರ್ವ
ಮತ್ತು ಪಶ್ಚಿಮದಲ್ಲಿದ್ದ ಕಾನಾನಿನ ರಾಜರುಗಳಿಗೂ
ಅಮೋರಿಯರಿಗೂ ಹಿತ್ತಿಯರಿಗೂ ಪೆರಿಜ್ಜೀಯರಿಗೂ
ಬೆಟ್ಟಪ್ರದೇಶದ ಯೆಬೂಸಿಯರಿಗೂ ಹೆರ್ಮೋನ್
ಪರ್ವತದ ಬುಡದಲ್ಲಿ ಮಿಚ್ಪಾದ ಹತ್ತಿರ ವಾಸವಾಗಿದ್ದ
ಹಿವ್ವಿಯರಿಗೂ ಸಂದೇಶವನ್ನು ಕಳುಹಿಸಿದನು. 4ಹೀಗಾಗಿ
ಈ ಎಲ್ಲ ರಾಜರ ಸೈನ್ಯಗಳು ಒಟ್ಟುಗೂಡಿದವು. ಈ ಮಹಾ
ಸೈನ್ಯದಲ್ಲಿ ಅಸಂಖ್ಯಾತ ಯೋಧರಿದ್ದರು, ಕುದುರೆ
ಗಳಿದ್ದವು ಮತ್ತು ರಥಗಳಿದ್ದವು. ಸಮುದ್ರತೀರದ ಮರಳು
ಕಣಗಳಷ್ಟೇ ಅಸಂಖ್ಯಾತ ಯೋಧರು ಆ ಸೈನ್ಯದಲ್ಲಿ
ರುವಂತೆ ಕಾಣುತ್ತಿತ್ತು.

5ಈ ಎಲ್ಲ ಅರಸರು ಮೇರೋಮ್ ಸಣ್ಣ ನದಿಯ ಹತ್ತಿರ
ಒಟ್ಟುಗೂಡಿ ತಮ್ಮ ಸೈನ್ಯಗಳನ್ನು ಒಂದೇ ಪಾಳೆಯದಲ್ಲಿ
ಸೇರಿಸಿದರು. ಅವರು ಇಸ್ರೇಲಿನ ವಿರುದ್ಧ ಯುದ್ಧ
ಮಾಡಲು ಯೋಜನೆಗಳನ್ನು ಮಾಡಿದರು.

6ಆಗ ಯೆಹೋವನು ಯೆಹೋಶುವನಿಗೆ,“ಆ ಸೈನ್ಯಕ್ಕೆ
ನೀನು ಹೆದರಬೇಡ. ನೀವು ಅವರನ್ನು ಸೋಲಿಸುವಂತೆ
ನಾನು ಮಾಡುತ್ತೇನೆ. ನಾಳೆ ಇಷ್ಟು ಹೊತ್ತಿಗೆ ನೀವು
ಅವರೆಲ್ಲರನ್ನು ಕೊಂದುಬಿಡುವಿರಿ. ನೀವು ಅವರ ಕುದುರೆ
ಗಳ ಕಾಲುಗಳನ್ನು ಕತ್ತರಿಸುವಿರಿ; ಅವರ ರಥಗಳನ್ನು
ಸುಟ್ಟುಹಾಕುವಿರಿ” ಎಂದನು.

7ಯೆಹೋಶುವನು ಮತ್ತು ಅವನ ಎಲ್ಲ ಸೈನಿಕರು ಶತ್ರು
ಗಳನ್ನು ಬೆರಗುಗೊಳಿಸಿದರು. ಮೇರೋಮ್ ನದಿಯ
ಬಳಿಯಲ್ಲಿ ಅವರು ಶತ್ರುಗಳ ಮೇಲೆ ದಾಳಿಮಾಡಿದರು.
8ಇಸ್ರೇಲರು ಶತ್ರುಗಳನ್ನು ಸೋಲಿಸುವಂತೆ ಯೆಹೋ
ವನು ಮಾಡಿದನು. ಇಸ್ರೇಲರ ಸೈನ್ಯವು ಶತ್ರುಗಳನ್ನು
ಸೋಲಿಸಿ ಅವರನ್ನು ದೊಡ್ಡ ಚೀದೋನ್ ಮತ್ತು
ಮಿಸ್ರೆಫೋತ್ಮಯಿಮ್‌ವರೆಗೂ ಪೂರ್ವದಿಕ್ಕಿನಲ್ಲಿ
ಮಿಚ್ಪೆಯ ಕಣಿವೆಯವರೆಗೂ ಬೆನ್ನಟ್ಟಿತು. ಶತ್ರುಗಳಲ್ಲಿ
ಯಾರೂ ಉಳಿದುಕೊಳ್ಳದಂತೆ ಇಸ್ರೇಲರು ಯುದ್ಧ
ಮಾಡಿದರು. 9ಯೆಹೋವನು ಹೇಳಿದಂತೆಯೇ
ಯೆಹೋಶುವನು ಮಾಡಿದನು. ಯೆಹೋಶುವನು
ಅವರ ಕುದುರೆಯ ಕಾಲುಗಳನ್ನು ಕತ್ತರಿಸಿದನು; ಅವರ
ರಥಗಳನ್ನು ಸುಟ್ಟುಹಾಕಿದನು.

10ಯೆಹೋಶುವನು ಹಿಂದಿರುಗಿ ಹೋಗಿ
ಹಾಚೋರನ್ನು ಸ್ವಾಧೀನಪಡಿಸಿಕೊಂಡನು. ಯೆಹೋಶು
ವನು ಹಾಚೋರಿನ ಅರಸನನ್ನು ಕೊಂದನು.
(ಹಾಚೋರ್ ಇಸ್ರೇಲಿನ ವಿರುದ್ಧ ಹೋರಾಡಿದ ಎಲ್ಲ
ರಾಜ್ಯಗಳಿಗೆ ಮುಂದಾಳಾಗಿತ್ತು.) 11ಇಸ್ರೇಲಿನ ಸೈನಿಕರು
ಆ ಪಟ್ಟಣದಲ್ಲಿದ್ದವರನ್ನೆಲ್ಲಾ ಕೊಂದುಬಿಟ್ಟರು; ಒಬ್ಬ
ರನ್ನೂ ಜೀವಂತವಾಗಿ ಅಲ್ಲಿ ಉಳಿಸಲಿಲ್ಲ. ಆಮೇಲೆ
ಅವರು ಆ ಪಟ್ಟಣವನ್ನು ಸುಟ್ಟುಬಿಟ್ಟರು.

12ಯೆಹೋಶುವನು ಈ ಎಲ್ಲ ಪಟ್ಟಣಗಳನ್ನು ವಶಪಡಿಸಿ
ಕೊಂಡನು; ಅವುಗಳ ಎಲ್ಲ ರಾಜರನ್ನು ಕೊಂದು
ಹಾಕಿದನು; ಈ ಪಟ್ಟಣಗಳಲ್ಲಿದ್ದ ಎಲ್ಲವನ್ನು ನಾಶ
ಮಾಡಿದನು. ಯೆಹೋವನ ಸೇವಕನಾದ ಮೋಶೆಯು
ಆಜ್ಞಾಪಿಸಿದಂತೆಯೇ ಅವನು ಮಾಡಿದನು. 13ಆದರೆ
ಇಸ್ರೇಲಿನ ಸೈನಿಕರು ಬೆಟ್ಟಗಳ ಮೇಲೆ ಕಟ್ಟಲಾದ ಯಾವ
ಪಟ್ಟಣವನ್ನೂ ಸುಡಲಿಲ್ಲ. ಬೆಟ್ಟಗಳ ಮೇಲೆ ಕಟ್ಟಿದ ಪಟ್ಟಣ
ಗಳಲ್ಲಿ ಅವರು ಸುಟ್ಟ ಒಂದೇ ಒಂದು ಪಟ್ಟಣವೆಂದರೆ
ಹಾಚೋರ್. ಈ ಪಟ್ಟಣವನ್ನು ಯೆಹೋಶುವನು
ಸುಟ್ಟನು. 14ಆ ಪಟ್ಟಣಗಳಲ್ಲಿ ಸಿಕ್ಕಿದ ಎಲ್ಲ ಪದಾರ್ಥ
ಗಳನ್ನು ಮತ್ತು ಎಲ್ಲ ಪಶುಗಳನ್ನು ಇಸ್ರೇಲರು ತಮಗಾಗಿ
ಇಟ್ಟುಕೊಂಡರು. ಆದರೆ ಅಲ್ಲಿದ್ದ ಜನರನ್ನೆಲ್ಲ ಕೊಂದರು.
ಅವರಲ್ಲಿ ಯಾರನ್ನೂ ಸಜೀವವಾಗಿ ಉಳಿಸಲಿಲ್ಲ.

15ಹೀಗೆ ಮಾಡಬೇಕೆಂದು ಯೆಹೋವನು ತನ್ನ
ಸೇವಕನಾದ ಮೋಶೆಗೆ ಬಹುಕಾಲದ ಹಿಂದೆಯೇ
ಹೇಳಿದ್ದನು. ಮೋಶೆಯು ಈ ಕಾರ್ಯವನ್ನು ಮಾಡಲು
ಯೆಹೋಶುವನಿಗೆ ಆಜ್ಞಾಪಿಸಿದ್ದನು. ಹೀಗೆ ಯೆಹೋಶು
ವನು ದೇವರ ಆಜ್ಞೆಯನ್ನು ಪಾಲಿಸಿದನು. ಯೆಹೋವನು
ಮೋಶೆಗೆ ಆಜ್ಞಾಪಿಸಿದ್ದೆಲ್ಲವನ್ನು ಯೆಹೋಶುವನು
ಮಾಡಿದನು.

16ಹೀಗೆ ಯೆಹೋಶುವನು ಆ ದೇಶದ ಎಲ್ಲರನ್ನು
ಸೋಲಿಸಿದನು. ಬೆಟ್ಟದ ಮೇಲಿನ ಪ್ರದೇಶ, ನೆಗೆವ್
ಪ್ರದೇಶ, ಗೋಷೆನಿನ ಎಲ್ಲ ಪ್ರದೇಶ, ಪಶ್ಚಿಮದ ಇಳಕಲಿನ
ಪ್ರದೇಶ , ಜೋರ್ಡನಿನ ಕಣಿವೆ , ಇಸ್ರೇಲಿನ ಪರ್ವತ
ಪ್ರದೇಶ ಮತ್ತು ಅವುಗಳ ಹತ್ತಿರದ ಎಲ್ಲ ಬೆಟ್ಟಗಳ ಪ್ರದೇಶ
ಅವನ ಸ್ವಾಧೀನಕ್ಕೆ ಬಂದವು. 17ಸೇಯೀರಿನ ಹತ್ತಿರ
ವಿರುವ ಹಾಲಾಕ್ ಬೆಟ್ಟದಿಂದ ಹೆರ್ಮೋನ್ ಬೆಟ್ಟದ
ಬುಡದಲ್ಲಿ ಲೆಬನೋನ್ ಕಣಿವೆಯಲ್ಲಿರುವ ಬಾಲ್ಗಾದ್
ಪಟ್ಟಣದವರೆಗೂ ಇರುವ ಭೂಮಿಯು ಅವನ ಸ್ವಾಧೀನ
ವಾಯಿತು. ಯೆಹೋಶುವನು ಆ ಪ್ರದೇಶದ ಎಲ್ಲ
ರಾಜರನ್ನು ಸೆರೆ ಹಿಡಿದು ಕೊಂದು ಹಾಕಿದನು.
18ಯೆಹೋಶುವನು ಆ ಅರಸರ ವಿರುದ್ಧ ಬಹುಕಾಲದ
ವರೆಗೆ ಹೋರಾಡಿದನು.

19ಆ ಪ್ರದೇಶದಲ್ಲಿ ಕೇವಲ ಒಂದು ಪಟ್ಟಣ ಮಾತ್ರ
ಇಸ್ರೇಲರೊಂದಿಗೆ ಶಾಂತಿ ಒಪ್ಪಂದ ಮಾಡಿಕೊಂಡಿತ್ತು.
ಅದೇ ಹಿವ್ವಿಯರ ಗಿಬ್ಯೋನ್ ಪಟ್ಟಣ. ಉಳಿದೆಲ್ಲ
ಪಟ್ಟಣಗಳು ಯುದ್ಧದಲ್ಲಿ ಸೋತುಹೋಗಿದ್ದವು.

20ತಾವು ಶಕ್ತಿಶಾಲಿಗಳೆಂಬ , ಬಾವನೆಯನ್ನು
ಯೆಹೋವನು ಆ ಜನರಲ್ಲಿ ಹುಟ್ಟಿಸಿ ಅವರನ್ನು
ಇಸ್ರೇಲರ ಮೇಲೆ ಯುದ್ಧಕ್ಕೆ ಬರಮಾಡಿದನು. ಯುದ್ಧ
ದಲ್ಲಿ ಕರುಣೆಯಿಲ್ಲದೆ ಅವರನ್ನು ಸಂಹರಿಸ ಬೇಕೆಂಬುದು
ಯೆಹೋವನ ಯೋಜನೆಯಾಗಿತ್ತು. ಯೆಹೋವನು
ಮೋಶೆಗೆ ಹೇಳಿದ ರೀತಿಯಲ್ಲಿ ಯೆಹೋಶುವನು ಆ

ಪಟ್ಟಣಗಳನ್ನು ನಾಶಮಾಡಲು ಇದರಿಂದ ಸಾಧ್ಯ
ವಾಯಿತು.
21ಆಗ ಅನಾಕ ವಂಶಸ್ಥರು * ಹೆಬ್ರೋನ್, ದೆಬೀರ್,
ಅನಾಬ್ ಮತ್ತು ಯೆಹೂದ ಬೆಟ್ಟಪ್ರದೇಶಗಳಲ್ಲಿ ವಾಸ
ವಾಗಿದ್ದರು. ಯೆಹೋಶುವನು ಈ ಅನಾಕ ವಂಶಸ್ಥ
ರೊಂದಿಗೆ ಯುದ್ಧ ಮಾಡಿದನು. ಯೆಹೋಶುವನು ಆ
ಎಲ್ಲ ಜನರನ್ನು ಮತ್ತು ಊರುಗಳನ್ನು ನಾಶಪಡಿಸಿದನು.
22ಇಸ್ರೇಲಿನ ಪ್ರದೇಶದಲ್ಲಿ ಅನಾಕ ವಂಶಸ್ಥರಲ್ಲಿ
ಯಾರೂ ಉಳಿಯಲಿಲ್ಲ.
ಜೀವಸಹಿತ ಉಳಿದ ಅನಾಕ ವಂಶಸ್ಥರು ಕೇವಲ ಗಾಜಾ,
ಗತೂರು, ಅಷ್ದೋದ್ ಎಂಬಲ್ಲಿ ಮಾತ್ರ ಇದ್ದರು.
23ಬಹಳ ಹಿಂದೆಯೇ ಯೆಹೋವನು ಮೋಶೆಗೆ ಹೇಳಿದ
ಪ್ರಕಾರ ಯೆಹೋಶುವನು ಇಸ್ರೇಲಿನ ಪ್ರದೇಶವನ್ನೆಲ್ಲ
ಸ್ವಾಧೀನಪಡಿಸಿಕೊಂಡನು. ಯೆಹೋವನು ತಾನು
ವಾಗ್ದಾನ ಮಾಡಿದಂತೆ ಆ ಪ್ರದೇಶವನ್ನು ಇಸ್ರೇಲರಿಗೆ
ಕೊಟ್ಟುಬಿಟ್ಟನು. ಆಗ ಯೆಹೋಶುವನು ಆ ಪ್ರದೇಶ
ವನ್ನು ಕುಲಗಳ ಪ್ರಕಾರ ಹಂಚಿಕೊಟ್ಟನು. ಆಗ ಯುದ್ಧವು
ಮುಗಿಯಿತು, ಕೊನೆಗೆ ಆ ಪ್ರದೇಶದಲ್ಲಿ ಶಾಂತಿ ನೆಲೆಸಿತು.

### ಇಸ್ರೇಲರು ಸೋಲಿಸಿದ ಅರಸರು

12 ಇಸ್ರೇಲರು ಜೋರ್ಡನ್ ನದಿಯ ಪೂರ್ವ
ದಿಕ್ಕಿನ ಭೂಮಿಯನ್ನು ಸ್ವಾಧೀನಪಡಿಸಿ
ಕೊಂಡರು. ಅರ್ನೋನ್ ನದಿಯಿಂದ ಹೆರ್ಮೋನ್
ಪರ್ವತದವರೆಗಿನ ಪ್ರದೇಶ ಮತ್ತು ಜೋರ್ಡನ್
ಕಣಿವೆಯ ಪೂರ್ವದಿಕ್ಕಿಗೆ ಉದ್ದಕ್ಕೂ ಹಬ್ಬಿರುವ ಪ್ರದೇಶ
ಅವರ ವಶಕ್ಕೆ ಬಂತು. ಈ ದೇಶವನ್ನು ತೆಗೆದು
ಕೊಳ್ಳುವುದಕ್ಕಾಗಿ ಇಸ್ರೇಲರು ಸೋಲಿಸಿದ ಅರಸರ ವಿವರ
ಹೀಗಿದೆ:
2ಅವರು ಹೆಷ್ಬೋನಿನಲ್ಲಿದ್ದ ಅಮೋರಿಯರ ಅರಸ
ನಾದ ಸೀಹೋನನನ್ನು ಸೋಲಿಸಿದರು. ಅವನು
ಅರ್ನೋನ್ ನದಿಯ ತೀರದಲ್ಲಿದ್ದ ಅರೋಯೇರ್
ನಿಂದ ಯಬ್ಬೋಕ್ ನದಿಯವರೆಗಿರುವ ಪ್ರದೇಶವನ್ನು
ಆಳುತ್ತಿದ್ದನು. ಅವನ ರಾಜ್ಯವು ಆ ತಗ್ಗು ಪ್ರದೇಶದ ಮಧ್ಯ
ದಿಂದ ಪ್ರಾರಂಭವಾಗುತ್ತಿತ್ತು. ಇದು ಅಮ್ಮೋನಿಯರ
ಪ್ರದೇಶಕ್ಕೂ ಮೇರೆಯಾಗಿತ್ತು. ಗಿಲ್ಯಾದಿನ ಅರ್ಧ
ಪ್ರದೇಶವು ಸೀಹೋನನ ಆಳ್ವಿಕೆಗೆ ಒಳಗಾಗಿತ್ತು.
3ಗಲಿಲೇಯ ಸರೋವರದಿಂದ ಲವಣಸಮುದ್ರದವರೆಗೆ
ಹಬ್ಬಿದ ಜೋರ್ಡನ್ ಕಣಿವೆಯ ಪೂರ್ವಭಾಗವು ಕೂಡ
ಅವನ ಆಳ್ವಿಕೆಗೆ ಒಳಪಟ್ಟಿತ್ತು. ಬೇತ್‌ಯೆಷಿಮೋತಿನಿಂದ
ದಕ್ಷಿಣದಲ್ಲಿ ಪಿಸ್ಗಾ ಬೆಟ್ಟದವರೆಗೆ ಹಬ್ಬಿದ ಪ್ರದೇಶವನ್ನು
ಸಹ ಅವನು ಆಳುತ್ತಿದ್ದನು.
4ಅವರು ಬಾಷಾನಿನ ಅರಸನಾದ ಓಗನನ್ನು ಸಹ
ಸೋಲಿಸಿದರು. ಓಗನು ರೆಫಾಯರ ವಂಶಸ್ಥನಾಗಿದ್ದನು.
ಅಷ್ಟರೋತ್ ಮತ್ತು ಎದ್ರ್ಯೈ ಎಂಬ ನಗರಗಳಲ್ಲಿ ವಾಸ
ವಾಗಿದ್ದ 5ಓಗನು ಹೆರ್ಮೋನ್ ಬೆಟ್ಟದ ಸೀಮೆ, ಸಲ್ಕಾ,
ಮತ್ತು ಬಾಷಾನಿನ ಎಲ್ಲ ಪ್ರದೇಶ, ಇವುಗಳನ್ನು ಆಳು
ತ್ತಿದ್ದನು. ಗೆಷೂರರು ಮತ್ತು ಮಾಕತೀ ಜನರು ವಾಸ
ಮಾಡುವ ಪ್ರದೇಶವು ಇವನ ರಾಜ್ಯದ ಮೇರೆಯಾಗಿತ್ತು.
ಹೆಷ್ಬೋನಿನ ಅರಸನಾದ ಸೀಹೋನನ ರಾಜ್ಯದ ಮೇರೆ
ಯವರೆಗೆ ಹಬ್ಬಿದ ಗಿಲ್ಯಾದಿನ ಅರ್ಧಪ್ರಾಂತವನ್ನು ಕೂಡ
ಓಗನು ಆಳುತ್ತಿದ್ದನು.
6ಯೆಹೋವನ ಸೇವಕನಾದ ಮೋಶೆಯು ಮತ್ತು
ಇಸ್ರೇಲರು ಈ ಎಲ್ಲ ಅರಸರನ್ನು ಸೋಲಿಸಿದರು.
ಮೋಶೆಯು ಈ ಪ್ರದೇಶವನ್ನು ರೂಬೇನನ ಕುಲ
ದವರಿಗೂ ಗಾದನ ಕುಲದವರಿಗೂ ಮನಸ್ಸೆ ಕುಲದ
ಅರ್ಧಜನರಿಗೂ ಕೊಟ್ಟುಬಿಟ್ಟನು. ಮೋಶೆಯು ಅವರಿಗೆ
ಈ ದೇಶವನ್ನು ಅವರ ಸ್ವಂತ ಪ್ರದೇಶವಾಗಿ ಕೊಟ್ಟನು.
7ಇಸ್ರೇಲರು ಜೋರ್ಡನ್ ನದಿಯ ಪಶ್ಚಿಮ ಪ್ರದೇಶ
ದಲ್ಲಿದ್ದ ಅರಸರನ್ನು ಸಹ ಸೋಲಿಸಿದರು. ಈ ಪ್ರದೇಶದಲ್ಲಿ
ಯೆಹೋಶುವನು ಜನರ ಮುಂದಾಳಾದನು.
(ಯೆಹೋಶುವನು ಈ ಪ್ರದೇಶವನ್ನು ಇಸ್ರೇಲಿನ
ಹನ್ನೆರಡು ಕುಲಗಳಿಗೆ ಹಂಚಿದನು. ದೇವರು ಅವರಿಗೆ
ಕೊಡುವುದಾಗಿ ವಾಗ್ದಾನ ಮಾಡಿದ್ದ ಪ್ರದೇಶವೇ
ಅದಾಗಿತ್ತು. ಈ ಪ್ರದೇಶವು ಲೆಬನೋನ್ ಕಣಿವೆಯ
ಬಾಲ್ಗಾದ್ ಮತ್ತು ಸೇಯೀರ್ ಹತ್ತಿರವಿದ್ದ ಹಾಲಾಕ್
ಬೆಟ್ಟದ ನಡುವೆ ಇತ್ತು.
8ಪರ್ವತ ಪ್ರದೇಶ, ಪಶ್ಚಿಮದಿಕ್ಕಿನ ಇಳಿಜಾರು ಪ್ರದೇಶ,
ಜೋರ್ಡನ್ ಕಣಿವೆ, ಪೂರ್ವದಿಕ್ಕಿನ ಬೆಟ್ಟಗಳು, ಮರು
ಭೂಮಿ ಮತ್ತು ನೆಗೆವ್ ಇದರಲ್ಲಿ ಸೇರಿಕೊಂಡಿದ್ದವು. ಈ
ಪ್ರದೇಶವು ಹಿತ್ತಿಯರ, ಅಮೋರಿಯರ, ಕಾನಾನ್ಯರ,
ಪೆರಿಜ್ಜೀಯರ, ಹಿವ್ವಿಯರ, ಯೆಬೂಸಿಯರ ವಾಸಸ್ಥಾನ
ವಾಗಿತ್ತು.) ಇಸ್ರೇಲರು ಸೋಲಿಸಿದ ಅರಸರ ಪಟ್ಟಿಯು
ಇಂತಿದೆ:

| | | |
|---|---|---|
| 9 | ಜೆರಿಕೋವಿನ ಅರಸ | 1 |
| | ‘ಆಯಿ’ಯ ಅರಸ ಬೇತೇಲ್ ಹತ್ತಿರ | 1 |
| 10 | ಜೆರುಸಲೇಮಿನ ಅರಸ | 1 |
| | ಹೆಬ್ರೋನಿನ ಅರಸ | 1 |
| 11 | ಯರ್ಮೂತಿನ ಅರಸ | 1 |
| | ಲಾಕೀಷಿನ ಅರಸ | 1 |
| 12 | ಎಗ್ಲೋನಿನ ಅರಸ | 1 |
| | ಗೆಜೆರಿನ ಅರಸ | 1 |
| 13 | ದೆಬೀರಿನ ಅರಸ | 1 |
| | ಗೆದೆರಿನ ಅರಸ | 1 |

**ಅನಾಕ ವಂಶಸ್ಥರು** ಅನಾಕನ ವಂಶದವರು. ಅವರು ಎತ್ತರವಾದ ಮತ್ತು ಬಲಶಾಲಿಗಳಾದ ಯೋಧರು ಎಂದು ಪ್ರಸಿದ್ಧರಾಗಿದ್ದರು.

| | | |
|---|---|---|
| 14 | ಹೊರ್ಮದ ಅರಸ | 1 |
| | ಅರಾದಿನ ಅರಸ | 1 |
| 15 | ಲಿಬ್ನದ ಅರಸ | 1 |
| | ಅದುಲ್ಲಾಮದ ಅರಸ | 1 |
| 16 | ಮಕ್ಕೇದದ ಅರಸ | 1 |
| | ಬೇತೇಲಿನ ಅರಸ | 1 |
| 17 | ತಪ್ಪೂಹದ ಅರಸ | 1 |
| | ಹೇಫೇರಿನ ಅರಸ | 1 |
| 18 | ಅಫೇಕದ ಅರಸ | 1 |
| | ಲಷ್ಷಾರೋನಿನ ಅರಸ | 1 |
| 19 | ಮಾದೋನಿನ ಅರಸ | 1 |
| | ಹಾಚೋರಿನ ಅರಸ | 1 |
| 20 | ಶಿಮ್ರೋನ್ಮೆರೋನಿನ ಅರಸ | 1 |
| | ಅಕ್ಷಾಫಿನ ಅರಸ | 1 |
| 21 | ತಾನಕದ ಅರಸ | 1 |
| | ಮೆಗಿದ್ದೋವಿನ ಅರಸ | 1 |
| 22 | ಕೆದೆಷಿನ ಅರಸ | 1 |
| | ಕರ್ಮೆಲ್‌ನಲ್ಲಿಯ ಯೊಕ್ನೆಯಾಮದ ಅರಸ | 1 |
| 23 | ದೋರ್ ಬೆಟ್ಟದ ಮೇಲಿರುವ ದೋರಿನ ಅರಸ | 1 |
| | ಗಿಲ್ಗಾಲದಲ್ಲಿಯ ಗೋಯಿಮ್‌ನ ಅರಸ | 1 |
| 24 | ತಿರ್ಚದ ಅರಸ | 1 |
| | ಒಟ್ಟು ಅರಸರು | 31 |

## ವಶಪಡಿಸಿಕೊಂಡಿಲ್ಲದ ಪ್ರದೇಶ

13 ಯೆಹೋಶುವನು ತುಂಬಾ ಮುದುಕನಾದಾಗ
ಯೆಹೋವನು ಅವನಿಗೆ,‘‘ಯೆಹೋಶುವನೆ,
ನೀನು ವೃದ್ಧನಾದೆ. ಆದರೆ ನೀನು ಇನ್ನೂ ಸ್ವಾಧೀನ
ಪಡಿಸಿಕೊಳ್ಳಬೇಕಾದ ಪ್ರದೇಶ ಬಹಳಷ್ಟಿದೆ’’ ಅಂದನು.
2ನೀನು ಗೆಷೂರ ಪ್ರದೇಶವನ್ನು ಮತ್ತು ಫಿಲಿಷ್ಟಿಯರ
ಪ್ರದೇಶವನ್ನು ಇನ್ನೂ ವಶಪಡಿಸಿಕೊಂಡಿಲ್ಲ. 3(ಈಜಿಪ್ಟಿನ
ಶೀಹೋರ್* ನದಿಯಿಂದ ಉತ್ತರದ ಎಕ್ರೋನ್
ಸೀಮೆಯವರೆಗೂ ಚಾಚಿಕೊಂಡಿರುವ ಭೂಮಿಯನ್ನು
ನೀನು ವಶಪಡಿಸಿಕೊಂಡಿಲ್ಲ. ಆ ಭೂಮಿಯು ಇನ್ನೂ
ಕಾನಾನ್ಯರ ಅಧೀನದಲ್ಲಿದೆ. ನೀನು ಗಾಜಾ, ಅಷ್ಡೋದ್,
ಅಷ್ಕೆಲೋನ್, ಗತೂರು ಮತ್ತು ಎಕ್ರೋನ್ ಎಂಬ ಐದು
ಮಂದಿ ಫಿಲಿಷ್ಟಿಯರ ನಾಯಕರನ್ನು ಇನ್ನೂ ಸೋಲಿಸ
ಬೇಕಾಗಿದೆ.) 4ಕಾನಾನ್ ದೇಶದ ದಕ್ಷಿಣದಲ್ಲಿ ವಾಸ
ವಾಗಿರುವ ಅವ್ವೀಯರನ್ನು ಸಹ ನೀನು ಸೋಲಿಸ
ಬೇಕಾಗಿದೆ. 5ನೀನು ಇಲ್ಲಿಯವರೆಗೂ ಗೆಬಾಲ್ಯರನ್ನು
ಸೋಲಿಸಿಲ್ಲ. ಹೆರ್ಮೋನ್ ಬೆಟ್ಟದ ಬುಡದಲ್ಲಿರುವ
ಬಾಲ್ಗಾದಿನ ಪೂರ್ವದಿಂದಿಡಿದು ಲೆಬೊಹಾಮಾತಿ
ನವರೆಗೆ ಇರುವ ಪ್ರದೇಶವನ್ನು ನೀನು ಗೆಲ್ಲಬೇಕು.
ಬಾಲ್ಗಾದ್ ಲೆಬನೋನ್ ಪ್ರದೇಶದಲ್ಲಿದೆ.
6‘‘ಲೆಬನೋನಿನಿಂದ ಮಿಸ್ರೆಫೋತ್ಮಯಿಮಿನವರೆಗಿರುವ
ಪರ್ವತ ಪ್ರದೇಶದಲ್ಲಿ ಚೀದೋನ್ಯರು ವಾಸವಾಗಿದ್ದಾರೆ.
ಆದರೆ ಇಸ್ರೇಲರಿಗಾಗಿ ನಾನು ಅವರನ್ನೆಲ್ಲಾ ಹೊರ
ತಳ್ಳುತ್ತೇನೆ. ಇಸ್ರೇಲರಿಗೆ ದೇಶವನ್ನು ಹಂಚುವಾಗ ಈ
ಪ್ರದೇಶವನ್ನು ಸೇರಿಸಿ 7ಒಂಭತ್ತು ಕುಲಗಳಿಗೂ ಮನಸ್ಸೆ
ಕುಲದ ಅರ್ಧ ಜನರಿಗೂ ಪಾಲುಮಾಡಿಕೊಡು.’’

## ದೇಶದ ಹಂಚಿಕೆ

8ಮನಸ್ಸೆ ಕುಲದ ಅರ್ಧ ಜನರು, ರೂಬೇನ್ ಮತ್ತು
ಗಾದ್ ಕುಲಗಳವರು ಈಗಾಗಲೇ ತಮ್ಮ ಸ್ವಾಸ್ಥ್ಯವನ್ನು
ತೆಗೆದುಕೊಂಡಿದ್ದರು. ಯೆಹೋವನ ಸೇವಕನಾದ
ಮೋಶೆಯು ಜೋರ್ಡನ್ ನದಿಯ ಪೂರ್ವದಿಕ್ಕಿನ
ಪ್ರದೇಶವನ್ನು ಅವರಿಗೆ ಕೊಟ್ಟಿದ್ದನು. 9ಅವರಿಗೆ ದೊರಕಿದ
ಪ್ರದೇಶವು ಅರ್ನೋನ್ ಕಣಿವೆಯ ಬಳಿಯಲ್ಲಿದ್ದ
ಅರೋಯೇರ್‌ನಿಂದ ಆರಂಭಗೊಂಡು ಮಧ್ಯಕಣಿವೆ
ಯಲ್ಲಿದ್ದ ಊರಿನವರೆಗೂ ವಿಸ್ತರಿಸಿಕೊಂಡಿತ್ತು. ಮೇದೆಬ
ದಿಂದ ದೀಬೋನಿನವರೆಗಿದ್ದ ಇಡೀ ಬಯಲು
ಪ್ರದೇಶವನ್ನು ಇದು ಒಳಗೊಂಡಿತ್ತು. 10ಅಮೋರಿಯರ
ಅರಸನಾದ ಸೀಹೋನನು ಆಳುತ್ತಿದ್ದ ಎಲ್ಲ ಪಟ್ಟಣಗಳು
ಆ ಪ್ರದೇಶದಲ್ಲಿದ್ದವು. ಆ ಅರಸನು ಹೆಷ್ಬೋನ್ ನಗರ
ದಲ್ಲಿ ಆಳುತ್ತಿದ್ದನು. ಅಮೋರಿಯರು ಮೊದಲು ನೆಲೆಸಿದ್ದ
ಪ್ರದೇಶದವರೆಗೆ ಈ ಪ್ರದೇಶ ವಿಸ್ತರಿಸಿತ್ತು. 11ಗಿಲ್ಯಾದ್
ಪಟ್ಟಣವೂ ಸಹ ಈ ಪ್ರದೇಶಕ್ಕೆ ಒಳಪಟ್ಟಿತ್ತು. ಗೆಷೂರರು
ಮತ್ತು ಮಾಕತೀಯರು ವಾಸಮಾಡುತ್ತಿದ್ದ ಪ್ರದೇಶವು
ಸಹ ಈ ಪ್ರದೇಶಕ್ಕೆ ಸೇರಿತ್ತು. ಇಡೀ ಹೆರ್ಮೋನ್ ಬೆಟ್ಟ
ಪ್ರದೇಶ ಮತ್ತು ಸಲ್ಕಾ ಪಟ್ಟಣದವರೆಗೆ ವಿಸ್ತರಿಸಿಕೊಂಡಿದ್ದ
ಬಾಷಾನಿನ ಎಲ್ಲ ಪ್ರಾಂತ್ಯಗಳು ಆ ಪ್ರದೇಶಕ್ಕೆ ಸೇರಿ
ಕೊಂಡಿದ್ದವು. 12ಓಗ್ ರಾಜನ ಎಲ್ಲ ಪ್ರಾಂತ್ಯಗಳು ಆ
ಪ್ರದೇಶದಲ್ಲಿ ಸೇರಿತ್ತು. ಓಗ್ ರಾಜನು ಬಾಷಾನಿನಲ್ಲಿ
ಆಳುತ್ತಿದ್ದನು. ಮೊದಲು ಅವನು ಅಷ್ಟರೋತ್ ಮತ್ತು
ಎದ್ರೈ ಗಳಲ್ಲಿದ್ದುಕೊಂಡು ಆಳುತ್ತಿದ್ದನು. ಓಗನು
ರೆಫಾಯರ ವಂಶಸ್ಥನಾಗಿದ್ದನು. ಮೊದಲು ಮೋಶೆಯು
ಆ ಜನರನ್ನು ಸೋಲಿಸಿ ಅವರ ಪ್ರದೇಶವನ್ನು ತೆಗೆದು
ಕೊಂಡಿದ್ದನು. 13ಇಸ್ರೇಲರು ಗೆಷೂರ್ಯರನ್ನೂ
ಮಾಕತೀಯರನ್ನೂ ಹೊರತಳ್ಳಲಿಲ್ಲ. ಅವರು ಇಂದಿಗೂ
ಇಸ್ರೇಲರ ಜೊತೆಯಲ್ಲಿಯೇ ಇರುತ್ತಾರೆ.
14ಲೇವಿಕುಲದವರಿಗೆ ಮಾತ್ರ ಯಾವ ಪ್ರದೇಶವೂ
ಸಿಕ್ಕಲಿಲ್ಲ. ಅದಕ್ಕೆ ಬದಲಾಗಿ, ಇಸ್ರೇಲರ ದೇವರಾದ
ಯೆಹೋವನು ಅವರಿಗೆ ವಾಗ್ದಾನ ಮಾಡಿದಂತೆ ಸರ್ವಾಂಗ
ಹೋಮಗಳಾಗಿ ಅರ್ಪಿತವಾಗುವ ಎಲ್ಲಾ ಪಶುಗಳಲ್ಲಿ
ಉಳಿದ ಭಾಗವನ್ನು ಅವರು ಪಡೆದುಕೊಳ್ಳುವರು.

---

**ಶೀಹೋರ್** ಬಹುಶಃ, ನೈಲ್ ನದಿಯ ಪೂರ್ವದಿಕ್ಕಿನ ಶಾಖೆಗಳಲ್ಲಿ ಒಂದು.

15 ಮೋಶೆಯು ರೂಬೇನನ ಕುಲದ ಪ್ರತಿಯೊಂದು
ಗೋತ್ರದವರಿಗೆ ಸ್ವಲ್ಪ ಸ್ವಲ್ಪ ಪ್ರದೇಶವನ್ನು ಕೊಟ್ಟಿದ್ದನು.
ಅವರಿಗೆ ಕೊಟ್ಟ ಪ್ರದೇಶದ ವಿವರ ಹೀಗಿದೆ:
16 ಅರ್ನೋನ್ ತಗ್ಗಿನ ಸಮೀಪದಲ್ಲಿದ್ದ ಅರೋಯೇರ್
ನಿಂದ ಮೇದೆಬದವರೆಗಿರುವ ಪ್ರದೇಶ. ಇದು ಇಡೀ
ತಪ್ಪಲ ಪ್ರದೇಶವನ್ನು ಮತ್ತು ಆ ತಗ್ಗು ಪ್ರದೇಶದ ಮಧ್ಯ
ದಲ್ಲಿದ್ದ ಊರುಗಳನ್ನು ಒಳಗೊಂಡಿತ್ತು. 17 ಆ ಪ್ರದೇಶವು
ಹೆಷ್ಬೋನಿನವರೆಗೆ ವಿಸ್ತರಿಸಿ ತಪ್ಪಲ ಪ್ರದೇಶದ ಎಲ್ಲಾ
ಊರುಗಳನ್ನೊಳಗೊಂಡಿತ್ತು. ಆ ಊರುಗಳು ಯಾವು
ವೆಂದರೆ: ದೀಬೋನ್, ಬಾಮೋತ್ ಬಾಳ್, ಬೇತ್ಬಾಳ್ಮೆ
ಯೋನ್, 18 ಯಹಚಾ, ಕೆದೇಮೋತ್ ಮೇಫಾಯತ್,
19 ಕಣಿವೆಯಲ್ಲಿರುವ ಪ್ರದೇಶ, ಬೆಟ್ಟದ ಮೇಲಿನ
ಕಿರ್ಯಾತಯಿಮ್, ಸಿಬ್ಮಾ, ಚೆರೆತ್ ಶಹರ್, 20 ಬೇತ್ಪೆ
ಗೋರ್, ಪಿಸ್ಗಾ ಬೆಟ್ಟಗಳು ಮತ್ತು ಬೇತ್ ಯೆಷಿಮೋತ್.
21 ಆದ್ದರಿಂದ ಅಮೋರಿಯರ ಅರಸನಾದ ಸೀಹೋನನ
ಆಳ್ವಿಕೆಯಲ್ಲಿದ್ದ ಎಲ್ಲ ಊರುಗಳನ್ನು ಆ ಪ್ರದೇಶವು
ಒಳಗೊಂಡಿತ್ತು. ಆ ಅರಸನು ಹೆಷ್ಬೋನ್ ಪಟ್ಟಣದಲ್ಲಿ
ಆಳಿದನು. ಆದರೆ ಮೋಶೆಯು ಅವನನ್ನು ಮತ್ತು
ಮಿದ್ಯಾನ್ ಜನರ ನಾಯಕರನ್ನು ಸೋಲಿಸಿದ್ದನು. ಎವೀ,
ರೆಕೆಮ್, ಚೂರ್, ಹೂರ್ ಮತ್ತು ರೆಬಾ, ಇವರೇ ಆ
ನಾಯಕರಾಗಿದ್ದರು. (ಈ ನಾಯಕರೆಲ್ಲ ಸೀಹೋನನ
ಜೊತೆಸೇರಿ ಯುದ್ಧಮಾಡಿದ್ದರು.) ಈ ನಾಯಕರೆಲ್ಲ
ಅದೇ ದೇಶದಲಿ ್ಲವಾಸವಾಗಿದ್ದರು. 22 ಇಸ್ರೇಲರು
ಬೆಯೋರನ ಮಗನಾದ ಬಿಳಾಮನನ್ನು ಕೊಂದರು.
(ಬಿಳಾಮನು ಮಂತ್ರ ವಿದ್ಯೆಯಿಂದ ಭವಿಷ್ಯವನ್ನು ಹೇಳು
ತ್ತಿದ್ದನು.) ಯುದ್ಧದಲ್ಲಿ ಇಸ್ರೇಲರು ಬಹಳಷ್ಟು ಜನರನ್ನು
ಕೊಂದರು. 23 ರೂಬೇನನ ಜನರಿಗೆ ಕೊಟ್ಟ ಪ್ರದೇಶ
ಜೋರ್ಡನ್ ನದಿಯ ದಡಕ್ಕೆ ಸೀಮಿತವಾಗಿತ್ತು. ಈ
ಪ್ರಕಾರ ರೂಬೇನನ ಕುಲದ ಗೋತ್ರದವರಿಗೆ ಕೊಟ್ಟ
ಪ್ರದೇಶವು ಇಲ್ಲಿ ಪಟ್ಟಿ ಮಾಡಿದ ಎಲ್ಲ ಊರುಗಳನ್ನು
ಮತ್ತು ಅವುಗಳ ಹೊಲಗಳನ್ನು ಒಳಗೊಂಡಿತ್ತು.

24 ಮೋಶೆಯು ಗಾದನ ಕುಲದ ಪ್ರತಿಯೊಂದು
ಗೋತ್ರದವರಿಗೆ ಕೊಟ್ಟ ಪ್ರದೇಶ ಇಂತಿದೆ:

25 ಮೋಶೆ ಅವರಿಗೆ ಯಗ್ಜೇರಿನ ಪ್ರದೇಶ ಮತ್ತು
ಗಿಲ್ಯಾದಿನ ಎಲ್ಲ ಪಟ್ಟಣಗಳನ್ನೂ ರಬ್ಬಾದ ಹತ್ತಿರವಿದ್ದ
ಅರೋಯೇರ್ ವರೆಗಿನ ಅಮ್ಮೋನಿಯರ ಅರ್ಧ
ಪ್ರದೇಶವನ್ನು ಕೊಟ್ಟನು. 26 ಆ ಪ್ರದೇಶವು ಹೆಷ್ಬೋನ್
ನಿಂದ ರಾಮತ್ ಮಿಚ್ಪೆ ಮತ್ತು ಬೆಟೋನೀಮ್ ಊರು
ಗಳವರೆಗೂ ಇರುವ ಪ್ರದೇಶ ಮತ್ತು ಮಹನಯಿಮಿನಿಂದ
ದೆಬೀರ್ ಪ್ರಾಂತ್ಯದವರೆಗೆ ಇರುವ ಪ್ರದೇಶವನ್ನು ಒಳ
ಗೊಂಡಿತ್ತು. 27 ಆ ಪ್ರದೇಶವು ಬೇತ್ ಹಾರಾಮ್,
ಬೇತ್ ನಿಮ್ರಾ, ಸುಕ್ಕೋತ್ ಮತ್ತು ಚಾಫೋನ್ ಕಣಿವೆ
ಗಳನ್ನು ಒಳಗೊಂಡಿತ್ತು. ಹೆಷ್ಬೋನಿನ ಅರಸನಾದ
ಸೀಹೋನನ ರಾಜ್ಯಕ್ಕೆ ಸೇರಿದ ಉಳಿದೆಲ್ಲ ಪ್ರದೇಶವನ್ನು
ಇದರಲ್ಲಿ ಸೇರಿಸಲಾಗಿತ್ತು. ಈ ಪ್ರದೇಶವು ಜೋರ್ಡನ್
ನದಿಯ ಪೂರ್ವಭಾಗದಲ್ಲಿತ್ತು. ಈ ಪ್ರದೇಶವು
ಗಲಿಲೇಯ ಸರೋವರದ ಕೊನೆಯವರೆಗೆ ವಿಸ್ತರಿಸಿತ್ತು.
28 ಮೋಶೆಯು ಗಾದ್ ಕುಲದವರಿಗೆ ಈ ಪ್ರದೇಶವನ್ನು
ಸ್ವಾಸ್ತ್ಯವಾಗಿ ಕೊಟ್ಟಿದ್ದನು. ಈ ಪ್ರದೇಶಕ್ಕೆ ಸೇರಿದ್ದ ಊರು
ಗಳನ್ನೆಲ್ಲ ಮೋಶೆಯು ಅವರ ಕುಟುಂಬಗಳಿಗನು
ಸಾರವಾಗಿ ಹಂಚಿ ಕೊಟ್ಟಿದ್ದನು.

29 ಮೋಶೆಯು ಮನಸ್ಸೆ ಕುಲದ ಅರ್ಧಕುಲದವರಿಗೆ
ಅವರ ಕುಟುಂಬಗಳಿಗನುಸಾರವಾಗಿ ಕೊಟ್ಟ ಪ್ರದೇಶದ
ವಿವರ:

30 ಈ ಪ್ರದೇಶವು ಮಹನಯಿಮಿನಿಂದ ಪ್ರಾರಂಭ
ವಾಗುತ್ತದೆ. ಇಡೀ ಬಾಷಾನ್, ಅರಸನಾದ ಓಗನ ಆಳ್ವಿಕೆಗೆ
ಒಳಪಟ್ಟ ಪ್ರದೇಶ, ಬಾಷಾನಿನಲ್ಲಿರುವ ಯಾಯೀರನ
ಎಲ್ಲ ಊರುಗಳು (ಒಟ್ಟು ಅರವತ್ತು ಊರುಗಳು) ಇದ
ರಲ್ಲಿ ಸೇರಿವೆ. 31 ಗಿಲ್ಯಾದಿನ ಅರ್ಧಭಾಗವು, ಅಷ್ಟರೋತ್,
ಎದ್ರೈ ಎಂಬ ಪಟ್ಟಣಗಳೂ ಇದರಲ್ಲಿ ಸೇರಿವೆ. (ಗಿಲ್ಯಾದ್,
ಅಷ್ಟರೋತ್ ಮತ್ತು ಎದ್ರೈ ಎಂಬ ಪಟ್ಟಣಗಳಲ್ಲಿ ರಾಜ
ನಾದ ಓಗ ವಾಸವಾಗಿದ್ದನು.) ಈ ಎಲ್ಲ ಪ್ರದೇಶವನ್ನು
ಮನಸ್ಸೆಯ ಮಗನಾದ ಮಾಕೀರನ ಅರ್ಧಗೋತ್ರ
ದವರಿಗೆ ಕೊಡಲಾಯಿತು. 32 ಮೋಶೆಯು ಈ ಪ್ರದೇಶ
ಗಳನ್ನೆಲ್ಲ ಆಯಾ ಕುಲಗಳಿಗೆ ಮೋವಾಬ್ ಬಯಲಿನಲ್ಲಿ
ಇಳಿದುಕೊಂಡಿದ್ದಾಗ ಹಂಚಿಕೊಟ್ಟನು. ಮೋವಾಬ್
ಬಯಲು ಜೆರಿಕೋ ನಗರಕ್ಕೆ ಪೂರ್ವದಲ್ಲಿಯೂ
ಜೋರ್ಡನ್ ನದಿಯ ಆಚೆದಡದಲ್ಲೂ ಇತ್ತು.
33 ಮೋಶೆಯು ಲೇವಿಕುಲದವರಿಗೆ ಯಾವ ಪ್ರದೇಶ
ವನ್ನೂ ಕೊಡಲಿಲ್ಲ. ಇಸ್ರೇಲಿನ ದೇವರಾದ
ಯೆಹೋವನು ಲೇವಿಯ ಕುಲದವರಿಗೆ ವಾಗ್ದಾನ ಮಾಡಿ
ದಂತೆ ಆತನೇ ಅವರಿಗೆ ಸ್ವಾಸ್ತ್ಯವಾಗಿದ್ದನು.

14 ಯಾಜಕನಾದ ಎಲ್ಲಾಜಾರನು, ನೂನನ ಮಗ
ನಾದ ಯೆಹೋಶುವನು ಮತ್ತು ಇಸ್ರೇಲಿನ
ಕುಲಗಳ ನಾಯಕರು, ಇಸ್ರೇಲರಿಗೆ ಕಾನಾನ್ ನಾಡಿನ
ಯಾವ ಯಾವ ಭಾಗವನ್ನು ಕೊಡಬೇಕೆಂಬುದನ್ನು
ತೀರ್ಮಾನಿಸಿ ದರು. 2 ಜನರು ತಮ್ಮ ಪ್ರದೇಶವನ್ನು ಯಾವ
ವಿಧಾನ ದಿಂದ ಆರಿಸಿಕೊಳ್ಳಬೇಕೆಂಬುದರ ಬಗ್ಗೆ
ಬಹುಕಾಲದ ಹಿಂದೆಯೇ ಯೆಹೋವನು ಮೋಶೆಗೆ
ತಿಳಿಸಿದ್ದನು. ತಮ್ಮ ತಮ್ಮ ಪ್ರದೇಶಗಳನ್ನು ನಿರ್ಣಯಿಸಲು
ಇಸ್ರೇಲಿನ ಒಂಭತ್ತುವರೆ ಕುಲಗಳ ಜನರು
ಚೀಟುಹಾಕಿದರು. 3 ಎರಡುವರೆ ಕುಲಗಳ ಜನರಿಗೆ
ಮೋಶೆಯು ಜೋರ್ಡನ್ ನದಿಯ ಪೂರ್ವದಿಕ್ಕಿನ
ಪ್ರದೇಶವನ್ನು ಕೊಟ್ಟಿದ್ದನು. ಆದರೆ ಲೇವಿಯ
ಕುಲದವರಿಗೆ ಉಳಿದವ ರಂತೆ ಯಾವ ಪ್ರದೇಶವನ್ನೂ
ಕೊಡಲಿಲ್ಲ. 4 ಹನ್ನೆರಡು ಕುಲಗಳಿಗೆ ಅವರವರ

ಪ್ರದೇಶಗಳ ಪೂರ್ಣಸ್ವಾಸ್ತ್ಯವನ್ನು ಕೊಡಲಾಯಿತು.
ಯೋಸೇಫನ ಮನೆತನದವರು ಮನಸ್ಸೆ ಮತ್ತು
ಎಫ್ರಾಯೀಮ್ ಎಂಬ ಎರಡು ಕುಲಗಳಾಗಿ
ವಿಂಗಡಿಸಲ್ಪಟ್ಟಿದ್ದರು. ಪ್ರತಿಯೊಂದು ಕುಲಕ್ಕೂ ಸ್ವಲ್ಪಸ್ವಲ್ಪ
ಪ್ರದೇಶ ದೊರೆಯಿತು. ಆದರೆ ಲೇವಿ ಕುಲದ ಜನರಿಗೆ
ಯಾವ ಪ್ರದೇಶವನ್ನೂ ಕೊಡಲಿಲ್ಲ. ಅವರಿಗೆ ವಾಸಿಸಲು
ಕೆಲವು ಊರುಗಳನ್ನು ಮಾತ್ರ ಕೊಡಲಾಯಿತು. ಈ
ಊರುಗಳು ಪ್ರತಿಯೊಂದು ಕುಲದ ಜನರ ಪ್ರದೇಶದಲ್ಲಿ
ಇದ್ದವು. ಅವರ ಪಶುಗಳಿಗಾಗಿ ಹುಲ್ಲುಗಾವಲುಗಳನ್ನು
ಕೊಡಲಾಯಿತು. 5ಇಸ್ರೇಲರ ಕುಲಗಳಿಗೆ ಪ್ರದೇಶವನ್ನು
ಹೇಗೆ ಹಂಚಬೇಕೆಂಬುದನ್ನು ಯೆಹೋವನು ಮೋಶೆಗೆ
ಹೇಳಿದ್ದನು. ಆತನು ಆಜ್ಞಾಪಿಸಿದ ರೀತಿಯಲ್ಲಿಯೇ
ಇಸ್ರೇಲರು ಪ್ರದೇಶವನ್ನು ಹಂಚಿಕೊಂಡರು.

### ಕಾಲೇಬನಿಗೆ ದೊರೆತ ಪ್ರದೇಶ

6ಒಂದು ದಿವಸ ಯೆಹೂದ ಕುಲದ ಕೆಲವರು ಗಿಲ್ಗಾಲಿ
ನಲ್ಲಿದ್ದ ಯೆಹೋಶುವನ ಬಳಿಗೆ ಬಂದರು. ಅವರಲ್ಲಿ
ಕನಿಜ್ಜೀಯನೂ, ಯೆಫುನ್ನೆಯ ಮಗನೂ ಆದ
ಕಾಲೇಬನು ಒಬ್ಬನಾಗಿದ್ದನು. ಕಾಲೇಬನು ಯೆಹೋಶು
ವನಿಗೆ, ‘‘ಕಾದೇಶ್‌ಬರ್ನೇಯದಲ್ಲಿ ಯೆಹೋವನು ತನ್ನ
ಸೇವಕನಾದ* ಮೋಶೆಯೊಂದಿಗೆ ನಮ್ಮಿಬ್ಬರ ವಿಷಯ
ವಾಗಿ ಮಾತಾಡಿದ್ದು ನಿನಗೆ ನೆನಪಿದೆಯಷ್ಟೇ.
7ಯೆಹೋವನ ಸೇವಕನಾದ ಮೋಶೆಯು, ಈ ದೇಶದಲ್ಲಿ
ಗೂಢಚರ್ಯ ಮಾಡುವುದಕ್ಕೆ ನನ್ನನ್ನು ಕಳುಹಿಸಿದ್ದನು.
ಆಗ ನನಗೆ ನಲವತ್ತು ವರ್ಷವಾಗಿತ್ತು. ನಾನು ಹಿಂತಿರುಗಿ
ಬಂದಾಗ ಈ ದೇಶದ ಬಗ್ಗೆ ದೇವರ ವಾಗ್ದಾನಗಳನ್ನು
ನಂಬಿ ಯಥಾರ್ಥವಾದ ಸಂಗತಿಗಳನ್ನು ಮೋಶೆಗೆ
ಹೇಳಿದೆ. 8ನನ್ನ ಜೊತೆಯಲ್ಲಿ ಬಂದ ಬೇರೆಯವರು
ಭಯವನ್ನುಂಟುಮಾಡುವ ಸಂಗತಿಗಳನ್ನು ಹೇಳಿದರು.
ಆದರೆ ಯೆಹೋವನು ಆ ಭೂಮಿಯನ್ನು ನಮಗೆ ಕೊಡು
ತ್ತಾನೆಂದು ನಾನು ನಿಜವಾಗಿ ನಂಬಿದ್ದೆ. 9ಆದುದರಿಂದ
ಮೋಶೆಯು ಅಂದು ನನಗೆ,‘‘ನೀನು ಸಂಚರಿಸಿ ನೋಡಿದ
ಆ ಭೂಮಿಯು ನಿನ್ನ ಸ್ವಂತ ಭೂಮಿಯಾಗುತ್ತದೆ. ನಿನ್ನ
ಮಕ್ಕಳು ಶಾಶ್ವತವಾಗಿ ಅದರ ಸ್ವಾಮ್ಯವನ್ನು ಹೊಂದಿರು
ತ್ತಾರೆ. ನೀನು ನನ್ನ ದೇವರಾದ ಯೆಹೋವನಲ್ಲಿ ನಿಜ
ವಾದ ನಂಬಿಕೆ ಇಟ್ಟಿದ್ದಕ್ಕಾಗಿ ಆ ಪ್ರದೇಶವನ್ನು ನಿನಗೆ
ಕೊಡುತ್ತೇನೆ’ ಎಂದು ವಾಗ್ದಾನ ಮಾಡಿದನು.
10‘‘ಯೆಹೋವನು ತಾನು ಹೇಳಿದಂತೆ ನನ್ನನ್ನು ನಲವ
ತ್ತೈದು ವರ್ಷ ಜೀವಂತವಾಗಿ ಉಳಿಸಿದ್ದಾನೆ. ಆ ಸಮಯ
ದಲ್ಲಿ ನಾವೆಲ್ಲರು ಅರಣ್ಯದಲ್ಲಿ ಸುತ್ತಾಡಿದೆವು. ಈಗ ನಾನು
ಎಂಭತ್ತೈದು ವರ್ಷದವನಾಗಿದ್ದೇನೆ. 11ಮೋಶೆಯು
ನನ್ನನ್ನು ಕಳುಹಿಸಿಕೊಟ್ಟಾಗ ನಾನು ದೃಢಕಾಯನಾಗಿ
ದ್ದಂತೆಯೇ ಈಗಲೂ ಸಹ ದೃಢಕಾಯನಾಗಿದ್ದೇನೆ. ಆಗ
ನಾನು ಯುದ್ಧಮಾಡಲು ಹೇಗೆ ಸಿದ್ಧವಾಗಿರುತ್ತಿದ್ದೆನೋ
ಅದೇ ರೀತಿ ಈಗಲೂ ಸಿದ್ಧನಾಗಿದ್ದೇನೆ. 12ಆದ್ದರಿಂದ
ಯೆಹೋವನು ನನಗೆ ಬಹಳ ಹಿಂದೆಯೇ ವಾಗ್ದಾನ
ಮಾಡಿದ್ದ ಬೆಟ್ಟಪ್ರದೇಶವನ್ನು ಈಗ ನನಗೆ ಕೊಡು. ಬಲಿಷ್ಠ
ರಾದ ಅನಾಕ ವಂಶಸ್ಥರು* ವಾಸವಾಗಿರುವ ಆ ಪಟ್ಟಣ
ಗಳು ಬಹಳ ದೊಡ್ಡದಾಗಿವೆ ಯೆಂದೂ ಸುಭದ್ರವಾದವು
ಗಳೆಂದೂ ನೀನು ಕೇಳಿರುವೆ. ಆದರೆ ಯೆಹೋವನು
ನನ್ನೊಂದಿಗಿರುವುದರಿಂದ ಆತನು ಹೇಳಿದಂತೆಯೇ ಆ
ಪ್ರದೇಶವನ್ನು ನಾನು ತೆಗೆದುಕೊಳ್ಳುತ್ತೇನೆ’’ ಅಂದನು.
13ಯೆಹೋಶುವನು ಯೆಫುನ್ನೆಯ ಮಗನಾದ ಕಾಲೇಬ
ನನ್ನು ಆಶೀರ್ವದಿಸಿ ಹೆಬ್ರೋನ್ ನಗರವನ್ನು ಅವನಿಗೆ
ಸ್ವಾಸ್ತ್ಯವಾಗಿ ಕೊಟ್ಟನು. 14ಆ ನಗರ ಈಗಲೂ ಕೆನಿಜ್ಜೀಯ
ನಾದ ಯೆಫುನ್ನೆಯ ಮಗನಾದ ಕಾಲೇಬನ ವಂಶದವರ
ಸ್ವಾಸ್ತ್ಯವಾಗಿದೆ. ಏಕೆಂದರೆ ಅವನು ಇಸ್ರೇಲಿನ ದೇವರಾದ
ಯೆಹೋವನನ್ನು ನಂಬಿದ್ದನು ಮತ್ತು ಆತನ ಆಜ್ಞೆಯನ್ನು
ಪಾಲಿಸಿದನು. 15ಹಿಂದೆ ಆ ನಗರದ ಹೆಸರು ಕಿರ್ಯಾ
ತಾರ್ಬ ಎಂದಿತ್ತು. ಅನಾಕ ವಂಶದವರಲ್ಲಿ ಶ್ರೇಷ್ಠನಾದ
ಅರ್ಬ ಎಂಬವನ ಸ್ಮರಣಾರ್ಥವಾಗಿ ಆ ನಗರಕ್ಕೆ ಅವನ
ಹೆಸರನ್ನೇ ಇಡಲಾಗಿತ್ತು.
ಇದಾದ ಮೇಲೆ, ಆ ಪ್ರದೇಶದಲ್ಲಿ ಶಾಂತಿ ನೆಲೆಸಿತು.

### ಯೆಹೂದ ಕುಲದವರಿಗೆ ಸ್ವಾಸ್ತ್ಯ

15 ಯೆಹೂದಕುಲಕ್ಕೆ ಕೊಟ್ಟ ಸ್ವಾಸ್ತ್ಯವನ್ನು ಆ ಕುಲದ
ಗೋತ್ರಗಳಲ್ಲಿ ಹಂಚಲಾಗಿತ್ತು. ಆ ಪ್ರದೇಶವು
ಎದೋಮಿನ ಗಡಿಯವರೆಗೂ ದಕ್ಷಿಣದಲ್ಲಿ ತೇಮಾನಿನ
ಅಂಚಿನಲ್ಲಿರುವ ಚಿನ್ ಅರಣ್ಯದವರೆಗೂ ವಿಸ್ತರಿಸಿ
ಕೊಂಡಿತು. 2ಯೆಹೂದ್ಯರ ಸ್ವಾಸ್ತ್ಯವು ಲವಣಸಮುದ್ರದ
ದಕ್ಷಿಣ ತೀರದಿಂದ ಆರಂಭವಾಗಿತ್ತು. 3ಆ ಸೀಮೆಯು
ದಕ್ಷಿಣದಲ್ಲಿ ಸ್ಕಾರ್ಪಿಯನ್ ಎಂಬ ಇಕ್ಕಟ್ಟಾದ ಮಾರ್ಗ
ದಿಂದ ಮುನ್ನಡೆದು ಚಿನ್ ಮರುಭೂಮಿಯವರೆಗೆ
ಹೋಗಿತ್ತು. ಅಲ್ಲಿಂದ ಅದು ದಕ್ಷಿಣದಲ್ಲಿ ಕಾದೇಶ್
ಬರ್ನೇಯದವರೆಗೂ ಹೆಚ್ರೋನ್‌ನಿಂದ ಅದ್ದಾರ
ವರೆಗೂ ಮುಂದುವರಿದು ಅಲ್ಲಿ ತಿರುಗಿಕೊಂಡು
ಕರ್ಕದವರೆಗೆ ವಿಸ್ತರಿಸಿತ್ತು. 4ಆ ಸೀಮೆಯು ಈಜಿಪ್ಟಿನ
ಅಚ್ಮೋನಿನ ಹಳ್ಳಕ್ಕೆ ಮುಂದುವರೆದು ಮೆಡಿಟರೆನಿಯನ್
ಸಮುದ್ರದವರೆಗೆ ಹಬ್ಬಿತ್ತು. ಈ ಭೂಮಿಯೆಲ್ಲಾ ಅವರ
ದಕ್ಷಿಣ ಸೀಮೆಯಲ್ಲಿತ್ತು.
5ಅವರ ಪ್ರದೇಶದ ಪೂರ್ವದಿಕ್ಕಿನ ಸೀಮೆ ಮೃತ್ಯು
ಸಾಗರದ ದಂಡೆಯಿಂದ ಜೋರ್ಡನ್ ನದಿಯು ಸಮುದ್ರ
ವನ್ನು ಸೇರುವ ಕ್ಷೇತ್ರದವರೆಗೆ ಹಬ್ಬಿತ್ತು.

---

**ತನ್ನ ಸೇವಕ** ಅಕ್ಷರಶಃ ‘‘ದೇವ ಮನುಷ್ಯ’’

**ಅನಾಕ ವಂಶಸ್ಥರು** ಅನಾಕನ ವಂಶದವರು. ಇವರು ಎತ್ತರವಾದ ಮತ್ತು ಬಲಶಾಲಿಗಳಾದ ಯೋಧರು ಎಂದು ಪ್ರಸಿದ್ಧರಾಗಿದ್ದರು. ಅರಣ್ಯಕಾಂಡ 13:33

ಅವರ ಉತ್ತರ ಸೀಮೆಯು ಜೋರ್ಡನ್ ನದಿಯು
ಲವಣಸಮುದ್ರವನ್ನು ಸೇರುವ ಕ್ಷೇತ್ರದಿಂದ ಆರಂಭವಾಗಿ
6ಅಲ್ಲಿಂದ ಬೇತ್‌ಹೊಗ್ಲಾಕ್ಕೆ ಸಾಗಿ ಬೇತ್‌ಅರಬಾದ
ಉತ್ತರಕ್ಕೆ ಮುಂದುವರಿದಿತ್ತು. ಅಲ್ಲಿಂದ ಅದು ಬೋಹ
ನನ (ಬೋಹನನು ರೂಬೇನನ ಮಗ ನಾಗಿದ್ದನು.)
ಬಂಡೆಯವರೆಗೆ ಸಾಗಿತ್ತು. 7ಅಲ್ಲಿಂದ ಅದು ಆಕೋರಿನ
ಕಣಿವೆಯಿಂದ ಹಾದು ದೆಬೀರಕ್ಕೆ ಮುಟ್ಟಿ ಅಲ್ಲಿ ಉತ್ತರಕ್ಕೆ
ಹೊರಳಿ ಗಿಲ್ಗಾಲಕ್ಕೆ ಮುಟ್ಟಿತ್ತು. ಅದುಮೀಮಿನ ಬೆಟ್ಟ
ದಿಂದ ಹೋಗುವ ದಾರಿಯ ಎದುರಿಗೆ ಗಿಲ್ಗಾಲ್ ಇದೆ.
ಅದು ಹಳ್ಳದ ದಕ್ಷಿಣ ಭಾಗದಲ್ಲಿದೆ. ಈ ಸೀಮೆಯು
ಏನ್‌ಷೆಮೆಷ್ ನದಿಯವರೆಗೆ ಹೋಗಿ ಏನ್ ರೋಗೆಲ್
ನಲ್ಲಿ ಕೊನೆಗೊಳ್ಳುತ್ತದೆ. 8ಆ ಸೀಮೆಯು ಯೆಬೂಸಿಯ
ನಗರದ ದಕ್ಷಿಣ ಮಾರ್ಗವಾಗಿ ಬೆನ್‌ಹಿನ್ನೋಮ್
ಕಣಿವೆಗೆ ಹೋಗುತ್ತದೆ. (ಯೆಬೂಸಿಯ ನಗರವನ್ನು
ಜೆರುಸಲೇಮ್ ಎಂದು ಕರೆಯುತ್ತಿದ್ದರು.) ಆ ಸ್ಥಳದಲ್ಲಿ
ಸೀಮೆಯು ಹಿನ್ನೋಮ್ ಕಣಿವೆಯ ಪಶ್ಚಿಮದಿಕ್ಕಿನ
ಬೆಟ್ಟದ ತುದಿಗೆ ಹೋಗುತ್ತದೆ. ಇದು ರೆಫಾಯೀಮ್
ಕಣಿವೆಯ ಉತ್ತರದ ಕೊನೆ. 9ಅಲ್ಲಿಂದ ಆ ಸೀಮೆಯು
ನೆಫ್ತೋಹ ಬುಗ್ಗೆಗೆ ಹೋಗುತ್ತದೆ; ಅಲ್ಲಿಂದ ಎಫ್ರೋನ್
ಬೆಟ್ಟದ ಸಮೀಪದ ನಗರಗಳಿಗೆ ಹೋಗುತ್ತದೆ; ಅಲ್ಲಿಂದ
ತಿರುಗಿ ‘ಬಾಲಾ’ ಎಂಬ ಊರಿಗೆ ಹೋಗುತ್ತದೆ. (‘ಬಾಲಾ
’ವನ್ನು ಕಿರ್ಯತ್ಯಾರೀಮ್ ಎಂದೂ ಕರೆಯುತ್ತಾರೆ.)10
ಬಾಲಾದಲ್ಲಿ ಆ ಸೀಮೆಯು ಪಶ್ಚಿಮಕ್ಕೆ ತಿರುಗಿಕೊಂಡು
ಸೇಯೀರ್ ಬೆಟ್ಟಪ್ರದೇಶಕ್ಕೆ ಹೋಗುತ್ತದೆ; ಅಲ್ಲಿಂದ
ಅದು ಯಾರೀಮ್ ಬೆಟ್ಟದ (ಕೆಸಾಲೋನ್) ಉತ್ತರ
ಮಾರ್ಗವಾಗಿ ಇಳಿಯುತ್ತಾ ಬೇತ್‌ಷೆಮೆಷಿಗೂ ಅಲ್ಲಿಂದ
ತಿಮ್ನಾ ಊರಿಗೂ ಹೋಗುತ್ತದೆ. 11ಅಲ್ಲಿಂದ ಆ ಗಡಿಯು
ಉತ್ತರ ದಿಕ್ಕಿನಲ್ಲಿರುವ ಎಕ್ರೋನ್ ಗುಡ್ಡಕ್ಕೆ ಹೋಗಿ
ಅಲ್ಲಿಂದ ಶಿಕ್ಕರೋನಿಗೆ ತಿರುಗಿಕೊಂಡು ಬಾಲಾ ಗುಡ್ಡ
ವನ್ನು ತಲುಪುತ್ತದೆ. ಆ ಗಡಿಯು ಯಬ್ನೇಲಿನವರೆಗೆ
ಮುಂದುವರೆದು ನಂತರ ಮೆಡಿಟರೆನಿಯನ್ ಸಮುದ್ರ
ತೀರದಲ್ಲಿ ಮುಗಿಯುವುದು. 12ಮೆಡಿಟರೆನಿಯನ್
ಸಮುದ್ರ ತೀರವೇ ಯೆಹೂದ್ಯರ ಸ್ವಾಸ್ತ್ಯದ ಪಶ್ಚಿಮ ಸೀಮೆ
ಯಾಗಿತ್ತು. ಹೀಗೆ ಯೆಹೂದ್ಯರ ಸ್ವಾಸ್ತ್ಯವು ಈ ನಾಲ್ಕು
ಸೀಮೆಯ ಒಳಗಡೆ ಇತ್ತು. ಯೆಹೂದ್ಯರ ಗೋತ್ರಗಳು
ಈ ಪ್ರದೇಶದಲ್ಲಿದ್ದವು.

13ಯೆಫುನ್ನೆಯ ಮಗನಾದ ಕಾಲೇಬನಿಗೆ ಯೆಹೂದ
ಕುಲದವರ ಸ್ವಾಸ್ತ್ಯದಲ್ಲಿಯೇ ಸ್ವಲ್ಪ ಪ್ರದೇಶವನ್ನು ಕೊಡ
ಬೇಕೆಂದು ದೇವರು ಯೆಹೋಶುವನಿಗೆ ಹೇಳಿದ್ದನು.
ಅದಕ್ಕಾಗಿ ಯೆಹೋಶುವನು ಕಾಲೇಬನಿಗೆ ದೇವರು
ಆಜ್ಞಾಪಿಸಿದ ಪ್ರದೇಶವನ್ನು ಕೊಟ್ಟನು. ಯೆಹೋಶುವನು
ಅವನಿಗೆ ಕಿರ್ಯಾತಾರ್ಬ (ಹೆಬ್ರೋನ್) ಎಂಬ
ಊರನ್ನು ಕೊಟ್ಟನು. (ಅರ್ಬನು ಅನಾಕನ ತಂದೆ.)
14ಹೆಬ್ರೋನ್‌ನಲ್ಲಿ ವಾಸವಾಗಿದ್ದ ಮೂರು ಅನಾಕ
ಕುಟುಂಬಗಳನ್ನು ಕಾಲೇಬನು ಅಲ್ಲಿಂದ ಬಲವಂತವಾಗಿ
ಹೊರಡಿಸಿದನು. ಆ ಕುಟುಂಬಗಳ ಹೆಸರುಗಳು ಶೇಷೈ,
ಅಹೀಮನ್ ಮತ್ತು ತಲ್ಮೈ. ಅವರು ಅನಾಕನ ವಂಶಸ್ಥ
ರಾಗಿದ್ದರು. 15ಆಮೇಲೆ ಕಾಲೇಬನು ದೆಬೀರಿನಲ್ಲಿ
ವಾಸಮಾಡುತ್ತಿದ್ದ ಜನರ ವಿರುದ್ಧ ಹೋರಾಡಿದನು.
(ಹಿಂದಿನ ಕಾಲದಲ್ಲಿ ದೆಬೀರಿಗೆ ಕಿರ್ಯತ್‌ಸೇಫೇರ್
ಎಂದು ಕರೆಯುತ್ತಿದ್ದರು.) 16ಕಾಲೇಬನು, ‘‘ನಾನು
ಕಿರ್ಯತ್ ಸೇಫೇರಿನ ಮೇಲೆ ದಾಳಿಮಾಡಿಲಿಚ್ಛಿಸುತ್ತೇನೆ.
ಆ ನಗರದ ಮೇಲೆ ದಾಳಿಮಾಡಿ ಅದನ್ನು ಗೆದ್ದುಕೊಟ್ಟ
ವರಿಗೆ ನನ್ನ ಮಗಳಾದ ಅಕ್ಷಾಳನ್ನು ಮದುವೆಮಾಡಿ
ಕೊಡುತ್ತೇನೆ’’ ಎಂದು ಸಾರಿದನು. 17ಕೆನಜನ ಮಗನಾದ
ಒತ್ನೀಯೇಲನು ಆ ಪಟ್ಟಣವನ್ನು ಗೆದ್ದನು. ಕಾಲೇಬನು
ತನ್ನ ಮಗಳಾದ ಅಕ್ಷಾಳನ್ನು ಒತ್ನೀಯೇಲನಿಗೆ ಮದುವೆ
ಮಾಡಿಕೊಟ್ಟನು. 18ಒತ್ನೀಯೇಲನ ಮನೆಗೆ ಅಕ್ಷಾ
ಹೋದಳು. ಕಾಲೇಬನಿಂದ ಇನ್ನಷ್ಟು ಭೂಮಿಯನ್ನು
ಕೇಳಲು ಅಕ್ಷಾಳನ್ನು ಒತ್ನೀಯೇಲನು* ಪ್ರೇರೇಪಿಸಿ
ದನು. ಅಕ್ಷಾಳು ತನ್ನ ತಂದೆಯ ಬಳಿಗೆ ಬಂದು ಕತ್ತೆಯ
ಮೇಲಿಂದ ಇಳಿದಾಗ, ‘‘ನಿನಗೆ ಏನುಬೇಕು?’’ ಎಂದು
ಕಾಲೇಬನು ಕೇಳಿದನು.

19ಅದಕ್ಕೆ ಅವಳು ‘‘ನನ್ನನ್ನು ಆಶೀರ್ವದಿಸು.* ನೀನು
ನನಗೆ ನೆಗೆವ್‌ನಲ್ಲಿ* ಮರುಭೂಮಿಯನ್ನು ಕೊಟ್ಟಿರುವೆ.
ದಯವಿಟ್ಟು ನೀರಿರುವ ಭೂಮಿಯನ್ನು ಸ್ವಲ್ಪ ಕೊಡು’’
ಎಂದು ಕೇಳಿಕೊಂಡಳು. ಅವಳ ಕೋರಿಕೆಗನುಸಾರವಾಗಿ
ಕಾಲೇಬನು ಮೇಲಿನ ಮತ್ತು ಕೆಳಗಿನ ನೀರಿನ
ಬುಗ್ಗೆಗಳನ್ನು ಕೊಟ್ಟನು. 20ದೇವರು ವಾಗ್ದಾನ ಮಾಡಿದ
ಭೂಮಿಯನ್ನು ಯೆಹೂದ ಕುಲವು ಪಡೆದುಕೊಂಡಿತು.
ಪ್ರತಿಯೊಂದು ಗೋತ್ರವು ಆ ಭೂಮಿಯ ಸ್ವಲ್ಪ
ಭಾಗವನ್ನು ಪಡೆಯಿತು. 21ಯೆಹೂದ ಕುಲವು ನೆಗೆವ್
ದಕ್ಷಿಣ ಭಾಗದಲ್ಲಿದ್ದ ಎಲ್ಲ ಊರುಗಳನ್ನು ಪಡೆಯಿತು.
ಈ ಊರುಗಳು ಎದೋಮಿನ ಸೀಮೆಯ ಹತ್ತಿರ ಇದ್ದವು.
ಆ ಊರುಗಳ ಪಟ್ಟಿಯನ್ನು ಇಲ್ಲಿ ಕೊಡಲಾಗಿದೆ:
ಕಬ್ಜೇಲ್, ಏದೆರ್, ಯಾಗೂರ್, 22ಕೀನಾ,
ದೀಮೋನಾ, ಆದಾದಾ, 23ಕೆದೆಷ್, ಹಾಚೋರ್,
ಇತ್ನಾನ್, 24ಜೀಫ್, ಟೆಲೆಮ್, ಬೆಯಾಲೋತ್,
25ಹಾಚೋರ್‌ಹದತ್ತಾ ಕಿರ್ಯೋತ್, ಹೆಚ್ರೋನ್
(ಹಾಚೋರ್), 26ಅಮಾಮ್, ಶೆಮ, ಮೋಲಾದಾ,

---

**ಅಕ್ಷಾಳನ್ನು ಒತ್ನೀಯೇಲನು** ಅಥವಾ ‘‘ಅಕ್ಷಾಳು ಒತ್ನೀಯೇಲನಿಗೆ ಹೇಳಿದಳು.’’

**ನನ್ನನ್ನು ಆಶೀರ್ವದಿಸು** ಅಥವಾ ‘‘ದಯವಿಟ್ಟು ನನಗೆ ಸುಸ್ವಾಗತವನ್ನು ಕೋರು’’ ಅಥವಾ ‘‘ನನಗೆ ನೀರಿನ ಒಂದು ಹಳ್ಳವನ್ನು ಕೊಡು.’’

**ನೆಗೆವ್** ಯೆಹೂದದ ದಕ್ಷಿಣದಲ್ಲಿದ್ದ ಮರುಭೂಮಿ.

27ಹಚರ್ಗದ್ದಾ, ಹೆಷ್ಮೋನ್ ಬೇತ್ಪೆಲೆಟ್, 28ಹಚರ್
ಷೂವಾಲ್, ಬೇರ್ಷೆಬ, ಬಿಜ್ಯೋತ್ಯಾ, ಬಾಲಾ,
ಇಯ್ಯೀಮ್, ಎಚೆಮ್, 30 ಎಲ್ತೋಲದ್, ಕೆಸೀಲ್,
ಹೊರ್ಮಾ, 31ಚಿಕ್ಲಗ್, ಮದ್ಮನ್ನಾ, ಸನ್ಸನ್ನಾ, 32ಲೆಬಾ
ವೋತ್, ಶಿಲ್ಹೀಮ್, ಆಯಿನ್ ಮತ್ತು ರಿಮ್ಮೋನ್.
ಒಟ್ಟಿಗೆ ಇಪ್ಪತ್ತೊಂಭತ್ತು ಊರುಗಳು ಮತ್ತು ಅವುಗಳ
ಎಲ್ಲ ಜಮೀನುಗಳು. 33ಯೆಹೂದ ಕುಲದವರು ಪಶ್ಚಿಮ
ದಿಕ್ಕಿನ ಇಳಕಲಿನ ಪ್ರದೇಶದಲ್ಲಿಯೂ ಕೆಲವು ಊರು
ಗಳನ್ನು ಪಡೆದಿದ್ದರು. ಆ ಊರುಗಳ ಪಟ್ಟಿಯನ್ನು ಇಲ್ಲಿ
ಕೊಡಲಾಗಿದೆ:

ಎಷ್ಟಾವೋಲ್, ಚೊರ್ಗಾ, ಅಶ್ನಾ, 34ಜನೋಹ,
ಏಂಗನ್ನೀಮ್, ತಪ್ಪೂಹ, ಏನಾಮ್, 35ಯರ್ಮೂತ್,
ಅದುಲ್ಲಾಮ್, ಸೋಕೋ, ಅಜೇಕಾ, 36ಶಾರಯೀಮ್,
ಅದೀತಯಿಮ್, ಗೆದೇರಾ ಮತ್ತು ಗೆದೆರೋತಯಿಮ್.
ಒಟ್ಟಿನಲ್ಲಿ ಹದಿನಾಲ್ಕು ಊರುಗಳು ಮತ್ತು ಅವುಗಳ
ಸುತ್ತಲೂ ಇದ್ದ ಎಲ್ಲ ಹೊಲಗದ್ದೆಗಳು.

37ಯೆಹೂದ ಕುಲದವರಿಗೆ ಈ ಊರುಗಳನ್ನು ಸಹ
ಕೊಡಲಾಯಿತು: ಚೆನಾನ್, ಹದಾಷಾ, ಮಿಗ್ದಲ್ಗಾದ್,
38ದಿಲಾನ್, ಮಿಚ್ಪೆ ಯೊಕ್ತೇಲ್, 39ಲಾಕೀಷ್,
ಬೊಚ್ಕತ್, ಎಗ್ಲೋನ್, 40ಕಬ್ಬೋನ್, ಲಹ್ಮಾಸ್,
ಕಿತ್ಲೀಷ್, 41ಗೆದೇರೋತ್, ಬೇತ್‌ದಾಗೋನ್, ನಾಮಾ
ಮತ್ತು ಮಕ್ಕೆದಾ. ಒಟ್ಟಿನಲ್ಲಿ ಹದಿನಾರು ಊರುಗಳು
ಮತ್ತು ಅವುಗಳ ಸುತ್ತಲಿನ ಹೊಲಗದ್ದೆಗಳು.

42ಯೆಹೂದದ ಜನರು ಈ ಊರುಗಳನ್ನು ಸಹ ಪಡೆದು
ಕೊಂಡರು: ಲಿಬ್ನಾ, ಎತೆರ್, ಆಷಾನ್, 43ಇಫ್ತಾಹ,
ಅಶ್ನಾ, ನೆಚೀಬ್, 44ಕೆಯೀಲಾ, ಅಕ್ಜೀಬ್, ಮಾರೇಷಾ
ಎಂಬ ಒಂಭತ್ತು ಪಟ್ಟಣಗಳು ಮತ್ತು ಅವುಗಳ ಹೊಲ
ಗದ್ದೆಗಳು:

45ಯೆಹೂದದ ಜನರು ಎಕ್ರೋನ್ ಪಟ್ಟಣವನ್ನು
ಮತ್ತು ಅದರ ಸಮೀಪದಲ್ಲಿದ್ದ ಎಲ್ಲ ಸಣ್ಣ ಊರುಗಳನ್ನು
ಮತ್ತು ಹೊಲಗದ್ದೆಗಳನ್ನು ಪಡೆದುಕೊಂಡರು.
46ಎಕ್ರೋನಿನ ಪಶ್ಚಿಮದಲ್ಲಿದ್ದ ಪ್ರದೇಶ ಮತ್ತು
ಅಷ್ಡೋದಿನ ಹತ್ತಿರದ ಎಲ್ಲಾ ಊರುಗಳನ್ನು ಮತ್ತು
ಹೊಲಗದ್ದೆಗಳನ್ನು ಸಹ ಅವರು ಪಡೆದುಕೊಂಡರು.
47ಅಷ್ಡೋದಿನ ಸುತ್ತಮುತ್ತಲ್ಲಿನ ಎಲ್ಲ ಕ್ಷೇತ್ರ ಮತ್ತು
ಅಲ್ಲಿಯ ಸಣ್ಣ ಊರುಗಳು ಯೆಹೂದ ಪ್ರದೇಶದ
ಭಾಗವಾಗಿದ್ದವು. ಯೆಹೂಬದದ ಜನರು ಗಾಜಾದ ಸುತ್ತ
ಮುತ್ತಲಿನ ಕ್ಷೇತ್ರ ಮತ್ತು ಹತ್ತಿರದ ಊರುಕೇರಿಗಳನ್ನೂ
ಹೊಲಗದ್ದೆಗಳನ್ನೂ ಪಡೆದುಕೊಂಡರು. ಅವರ ನೆಲವು
ಈಜಿಪ್ಟಿನ ನದಿಯವರೆಗೂ ವಿಸ್ತರಿಸಿತ್ತು; ಮೆಡಿಟರೆನಿ
ಯನ್ ಸಮುದ್ರದ ತೀರದುದ್ದಕ್ಕೂ ಚಾಚಿತ್ತು.

48ಯೆಹೂದದ ಜನರಿಗೆ ಬೆಟ್ಟಪ್ರದೇಶದಲ್ಲಿಯೂ
ಊರುಗಳನ್ನು ಕೊಡಲಾಗಿತ್ತು. ಆ ಊರುಗಳ ಪಟ್ಟಿ
ಇಂತಿದೆ: ಶಾಮೀರ್, ಯತ್ತೀರ್, ಸೋಕೋ, 49ದನ್ನಾ,
ಕಿರ್ಯತ್‌ಸನ್ನಾ (ದೆಬೀರ್), 50ಅನಾಬ್, ಎಷ್ಟೆಮೋ,
ಆನೀವ್, 51ಗೋಷೆನ್, ಹೋಲೋನ್ ಮತ್ತು
ಗಿಲೋ, ಎಂಬ ಹನ್ನೊಂದು ಊರುಗಳು ಮತ್ತು ಅವುಗಳ
ಸುತ್ತಮುತ್ತಲಿನ ಎಲ್ಲ ಜಮೀನು.

52ಯೆಹೂದದ ಜನರಿಗೆ ಈ ಊರುಗಳನ್ನು ಸಹ
ಕೊಡಲಾಯಿತು: ಅರಬ್, ದೂಮಾ, ಎಷಾನ್,
53ಯಾನೂಮ್, ಬೇತ್‌ತಪ್ಪೂಹ, ಅಫೇಕಾ, 54ಹುಮ್ಟಾ
ಕಿರ್ಯತ್‌ಅರ್ಬ(ಹೆಬ್ರೋನ್) ಮತ್ತು ಚೀಯೋರ್
ಎಂಬ ಒಂಭತ್ತು ಊರುಗಳು ಮತ್ತು ಅವುಗಳ ಸುತ್ತ
ಮುತ್ತಲಿನ ಹೊಲಗದ್ದೆಗಳು.

55ಯೆಹೂದದ ಜನರಿಗೆ ಈ ಊರುಗಳನ್ನೂ
ಕೊಡಲಾಯಿತು: ಮಾವೋನ್, ಕರ್ಮೆಲ್, ಜೀಫ್,
ಯುಟ್ಟಾ, 56ಇಜ್ರೇಲ್, ಯೆಗ್ದೆಯಾಮ್, ಜನೋಹ,
57ಕಯಿನ್, ಗಿಬೆಯಾ ಮತ್ತು ತಿಮ್ನಾ ಎಂಬ ಹತ್ತು
ಊರುಗಳು ಮತ್ತು ಅವುಗಳ ಸುತ್ತಮುತ್ತಲಿನ
ಹೊಲಗದ್ದೆಗಳು.

58ಯೆಹೂದದ ಜನರಿಗೆ ಈ ಊರುಗಳನ್ನೂ ಕೊಡ
ಲಾಯಿತು: ಹಲ್ಹೂಲ್, ಬೇತ್‌ಚೂರ್, ಗೆದೋರ್,
59ಮಾರಾತ್, ಬೇತನೋತ್, ಎಲ್ಟೆಕೋನ್ ಎಂಬ ಆರು
ಊರುಗಳು ಮತ್ತು ಅವುಗಳ ಸುತ್ತಮುತ್ತಲಿನ ಹೊಲ
ಗದ್ದೆಗಳು.

60ಯೆಹೂದದ ಜನರಿಗೆ ರಬ್ಬಾ ಮತ್ತು
ಕಿರ್ಯತ್‌ಬಾಳ್ (ಕಿರ್ಯತ್ಯಾರೀಮ್) ಎಂಬ ಎರಡು
ಊರುಗಳನ್ನು ಸಹ ಕೊಡಲಾಯಿತು.

61ಯೆಹೂದದ ಜನರಿಗೆ ಮರುಭೂಮಿಯಲ್ಲಿಯೂ
ಕೆಲವು ಊರುಗಳನ್ನು ಕೊಡಲಾಯಿತು. ಆ ಊರುಗಳ
ಪಟ್ಟಿಯನ್ನು ಇಲ್ಲಿ ಕೊಡಲಾಗಿದೆ: ಬೇತ್‌ಅರಾಬಾ,
ಮಿದ್ದೀನ್, ಸೆಕಾಕಾ, 62ನಿಬ್ಷಾನ್, ಉಪ್ಪಿನ ಪಟ್ಟಣ,
ಮತ್ತು ಏಂಗೆದೀ, ಒಟ್ಟು ಆರು ಊರುಗಳು ಮತ್ತು ಅವು
ಗಳ ಸುತ್ತಮುತ್ತಲಿನ ಹೊಲಗದ್ದೆಗಳು.

63ಜೆರುಸಲೇಮಿನಲ್ಲಿ ವಾಸವಾಗಿದ್ದ ಯೆಬೂಸಿ
ಯರನ್ನು ಹೊರಹಾಕಲು ಯೆಹೂದ ಕುಲದವರಿಗೆ ಸಾಧ್ಯ
ವಾಗಲಿಲ್ಲ. ಆದುದರಿಂದ ಯೆಬೂಸಿಯರು ಇಂದಿನ
ವರೆಗೂ ಜೆರುಸಲೇಮಿನಲ್ಲಿ ಯೆಹೂದ ಕುಲದವ
ರೊಡನೆ ವಾಸವಾಗಿದ್ದಾರೆ.

## ಎಫ್ರಾಯೀಮ್ ಮತ್ತು ಮನಸ್ಸೆ ಕುಲದವರಿಗೆ ಸ್ವಾಸ್ಥ್ಯಗಳು

16 ಯೋಸೇಫನ ಕುಟುಂಬದವರು ಈ ಸ್ವಾಸ್ಥ್ಯವನ್ನು
ಪಡೆದುಕೊಂಡರು. ಅವರ ಸ್ವಾಸ್ಥ್ಯವು
ಜೋರ್ಡನ್ ನದಿಯಿಂದ ಜೆರಿಕೋ ಹತ್ತಿರ ಆರಂಭವಾಗಿ
ಜೆರಿಕೋವಿನ ಹಳ್ಳಗಳ ಉದ್ದಕ್ಕೂ ಮುಂದುವರೆದಿದೆ.

(ಇದು ಜೆರಿಕೋವಿನ ಪೂರ್ವದಲ್ಲಿದೆ.) ಆ ಸೀಮೆಯು
ಜೆರಿಕೋವಿನಿಂದ ಬೇತೇಲಿನ ಬೆಟ್ಟಪ್ರದೇಶಕ್ಕೆ ಮುಂದು
ವರೆಯುತ್ತದೆ. 2ಬೇತೇಲಿನಿಂದ (ಲೂಜ್) ಅಟಾರೋತಿ
ನಲ್ಲಿ ಅರ್ಕೀಯರ ಸೀಮೆಗೆ ಹೋಗುತ್ತದೆ. 3ಅಲ್ಲಿಂದ
ಪಶ್ಚಿಮದಿಕ್ಕಿನಲ್ಲಿರುವ ಯಫ್ಲೇಟ್ಯರ ಪ್ರಾಂತ್ಯದ ಸೀಮೆಗೆ
ಮುಟ್ಟಿ ಅಲ್ಲಿಂದ ಕೆಳಗಿನ ಬೇತ್‌ಹೋರೋನ್ ಕಡೆಗೆ
ಮುಂದುವರೆಯುತ್ತದೆ. ಅಲ್ಲಿಂದ ಗೆಜೆರಿಗೆ ಹೋಗಿ
ಮೆಡಿಟರೆನಿಯನ್ ಸಾಗರದತ್ತ ಮುಂದುವರೆಯುತ್ತದೆ.

4ಮನಸ್ಸೆ ಕುಲದವರು ಮತ್ತು ಎಫ್ರಾಯೀಮ್ ಕುಲ
ದವರು ತಮ್ಮ ಪಾಲಿನ ಸ್ವಾಸ್ತ್ಯವನ್ನು ಪಡೆದರು. (ಮನಸ್ಸೆ
ಮತ್ತು ಎಫ್ರಾಯೀಮರು ಯೋಸೇಫನ ಮಕ್ಕಳು.)

5ಎಫ್ರಾಯೀಮ್‌ಕುಲದವರಿಗೆ ಕೊಟ್ಟ ಸ್ವಾಸ್ತ್ಯವು
ಇಂತಿದೆ: ಅವರ ಸ್ವಾಸ್ತ್ಯದ ಪೂರ್ವ ದಿಕ್ಕಿನ ಸೀಮೆಯು
ಮೇಲಿನ ಬೇತ್‌ಹೋರೋನಿನ ಹತ್ತಿರ ಇದ್ದ
ಅಟಾರೋತದ್ದಾರಿನಿಂದ ಆರಂಭವಾಗುತ್ತದೆ. 6ಆದರ
ಪಶ್ಚಿಮದಿಕ್ಕಿನ ಸೀಮೆಯು ಮಿಕ್ಮೆತಾತ್‌ನಿಂದ ಆರಂಭ
ವಾಗಿ ಪೂರ್ವದ ಕಡೆಗೆ ತಿರುಗಿಕೊಂಡು ತಾನತ್‌ಶೀಲೋ
ಎಂಬಲ್ಲಿಗೆ ಹೋಗಿ ಯಾನೋಹ ಊರಿನ ಪೂರ್ವ
ದಿಕ್ಕಿನಲ್ಲಿ ಮುಂದುವರೆಯುತ್ತದೆ. 7ಅಲ್ಲಿಂದ ಆ
ಸೀಮೆಯು ಯಾನೋಹ ಮಾರ್ಗವಾಗಿ ಅಟಾರೋತ್,
ನಾರಾ ಎಂಬ ಊರುಗಳ ಮೇಲೆ ಇಳಿಯುತ್ತದೆ. ಆ
ಸೀಮೆಯು ಜೆರಿಕೋವಿನವರೆಗೆ ಮುನ್ನಡೆದು
ಜೋರ್ಡನ್ ನದಿಯ ಹತ್ತಿರ ಮುಗಿಯುತ್ತದೆ. 8ಆ
ಮೇರೆಯು ತಪ್ಪೂಹದಿಂದ ಪಶ್ಚಿಮದ ಕಡೆಗೆ ಹೋಗುವ
ಕಾನಾ ನದಿಗೆ ಹೋಗಿ ಸಮುದ್ರದಲ್ಲಿ ಕೊನೆಗೊಳ್ಳುತ್ತದೆ.
ಈ ಪ್ರದೇಶವನ್ನು ಎಫ್ರಾಯೀಮ್ ಕುಲದವರಿಗೆ ಅವರ
ಕುಟುಂಬಗಳಿಗನುಸಾರವಾಗಿ ಕೊಡಲಾಗಿತ್ತು. 9ಎಫ್ರಾ-
ಯೀಮಿನ ಹಲವಾರು ಗಡಿಯ ಗ್ರಾಮಗಳು ಮನಸ್ಸೆ ಕುಲ
ದವರ ಪ್ರದೇಶದೊಳಗೆ ಸೇರಿಕೊಂಡಿದ್ದವು. ಆದರೂ
ಎಫ್ರಾಯೀಮ್ ಜನರು ಆ ಊರುಗಳನ್ನು ಮತ್ತು ಅವು
ಗಳ ಸುತ್ತಮುತ್ತಲಿನ ಹೊಲಗದ್ದೆಗಳನ್ನು ತಮ್ಮ ಸ್ವತ್ತಾಗಿ
ಮಾಡಿಕೊಂಡಿದ್ದರು. 10ಆದರೆ ಎಫ್ರಾಯೀಮಿನ ಜನರಿಗೆ
ಗೆಜೆರಿನಲ್ಲಿದ್ದ ಕಾನಾನ್ಯರನ್ನು ಅಲ್ಲಿಂದ ಹೊರದೂಡು
ವುದು ಸಾಧ್ಯವಾಗಲಿಲ್ಲ. ಆದಕ್ಕಾಗಿ ಇಂದಿಗೂ ಕಾನಾನ್ಯರು
ಎಫ್ರಾಯೀಮ್ ಜನರೊಂದಿಗೆ ಇರುತ್ತಾರೆ. ಆದರೆ
ಕಾನಾನ್ಯರು ಎಫ್ರಾಯೀಮ್ ಜನರ ದಾಸರಾಗಿದ್ದಾರೆ.

17 ಆಮೇಲೆ ಮನಸ್ಸೆ ಕುಲದವರಿಗೆ ಭೂಮಿಯನ್ನು
ಕೊಡಲಾಯಿತು. ಮನಸ್ಸೆಯು ಯೋಸೇಫನ
ಚೊಚ್ಚಲ ಮಗನು. ಗಿಲ್ಯಾದನ ತಂದೆಯಾದ
ಮಾಕೀರನು ಮನಸ್ಸೆಯ ಚೊಚ್ಚಲ ಮಗನು.
ಮಾಕೀರನು ವೀರ ಸೈನಿಕನಾಗಿದ್ದನು. ಈ ಕಾರಣದಿಂದ
ಗಿಲ್ಯಾದ್ ಮತ್ತು ಬಾಷಾನ್ ಕ್ಷೇತ್ರಗಳನ್ನು ಮಾಕೀರ
ಮನೆತನದವರಿಗೆ ಕೊಡಲಾಯಿತು. 2ಮನಸ್ಸೆ ಕುಲದ
ಅಬೀಯೆಜೆರ್, ಹೇಲೆಕ್, ಅಸ್ರೀಯೇಲ್, ಶೆಕೆಮ್,
ಹೇಫೇರ್, ಶೆಮೀದಾ ಎಂಬವರ ವಂಶದವರಿಗೂ
ಭೂಮಿಯನ್ನು ಕೊಡಲಾಯಿತು. ಇವರೆಲ್ಲರು
ಯೋಸೇಫನ ಮಗನಾದ ಮನಸ್ಸೆಯ ಉಳಿದ ಗಂಡು
ಮಕ್ಕಳು. ಈ ಜನರ ವಂಶದವರೂ ತಮ್ಮ ಪಾಲಿನ
ಭೂಮಿಯನ್ನು ಪಡೆದುಕೊಂಡರು.

3ಚಲ್ಪಹಾದನು ಹೇಫೆರನ ಮಗನು, ಹೇಫೆರನು ಗಿಲ್ಯಾ
ದನ ಮಗನು, ಗಿಲ್ಯಾದನು ಮಾಕೀರನ ಮಗನು.
ಮಾಕೀರನು ಮನಸ್ಸೆಯ ಮಗನು. ಚಲ್ಪಹಾದನಿಗೆ ಗಂಡು
ಮಕ್ಕಳಿರಲಿಲ್ಲ. ಆದರೆ ಅವನಿಗೆ ಐದು ಜನ ಹೆಣ್ಣು
ಮಕ್ಕಳಿದ್ದರು. ಅವರ ಹೆಸರುಗಳು: ಮಹ್ಲಾ, ನೋಹಾ,
ಹೊಗ್ಲಾ, ಮಿಲ್ಕಾ ಮತ್ತು ತಿರ್ಚಾ. 4ಆ ಹೆಣ್ಣುಮಕ್ಕಳು
ಯಾಜಕನಾದ ಎಲ್ಲಾಜಾರ್, ನೂನನ ಮಗನಾದ
ಯೆಹೋಶುವ ಮತ್ತು ಇಸ್ರೇಲರ ನಾಯಕರ ಹತ್ತಿರ
ಹೋಗಿ ,‘‘ಗಂಡುಮಕ್ಕಳಿಗೆ ಕೊಟ್ಟ ಹಾಗೆ ನಮಗೂ
ಭೂಮಿಯನ್ನು ಕೊಡಬೇಕೆಂದು ಯೆಹೋವನು
ಮೋಶೆಗೆ ಹೇಳಿದ್ದಾನೆ’’ ಅಂದರು. ಎಲ್ಲಾಜಾರನು
ಯೆಹೋವನ ಆಜ್ಞೆಯನ್ನು ಪಾಲಿಸಿ ಆ ಹೆಣ್ಣುಮಕ್ಕಳಿಗೆ
ಸ್ವಲ್ಪ ಭೂಮಿಯನ್ನು ಕೊಟ್ಟನು. ಹೀಗೆ ಈ ಹೆಣ್ಣುಮಕ್ಕಳು
ಗಂಡುಮಕ್ಕಳಂತೆಯೇ ಭೂಮಿಯನ್ನು ಪಡೆದರು.

5ಮನಸ್ಸೆ ಕುಲದವರು ಜೋರ್ಡನ್ ನದಿಯ ಪಶ್ಚಿಮ
ದಲ್ಲಿ ಹತ್ತು ಭೂಭಾಗಗಳನ್ನು ಮತ್ತು ಆ ನದಿಯ
ಮತ್ತೊಂದು ದಿಕ್ಕಿನಲ್ಲಿ ಗಿಲ್ಯಾದ್‌ಮತ್ತು ಬಾಷಾನ್ ಎಂಬ
ಮತ್ತೆರಡು ಭೂಭಾಗಗಳನ್ನು ಪಡೆದುಕೊಂಡರು.
6ಮನಸ್ಸೆಯ ಹೆಣ್ಣುಮಕ್ಕಳು ಗಂಡುಮಕ್ಕಳಂತೆಯೇ
ಭೂಮಿಯನ್ನು ಪಡೆದರು. ಗಿಲ್ಯಾದ್ ಪ್ರದೇಶವನ್ನು
ಮನಸ್ಸೆ ಕುಲದ ಉಳಿದ ಕುಟುಂಬಗಳಿಗೆ
ಕೊಡಲಾಯಿತು.

7ಮನಸ್ಸೆ ಕುಲದವರ ಪ್ರದೇಶಗಳು ಆಶೇರ್ ಮತ್ತು
ಶೆಕೆಮಿನ ಹತ್ತಿರವಿದ್ದ ಮಿಕ್ಮೆತಾತಿನ ಮಧ್ಯದಲ್ಲಿ ಬರುತ್ತವೆ.
ಅದರ ಸೀಮೆಯು ದಕ್ಷಿಣದಲ್ಲಿ ಎನ್‌ತಪ್ಪೂಹ ಪ್ರದೇಶಕ್ಕೆ
ಮುಟ್ಟುತ್ತದೆ. 8ತಪ್ಪೂಹದ ಸುತ್ತಮುತ್ತಲಿನ ಭೂಮಿ
ಮನಸ್ಸೆಕುಲದವರ ಸ್ವತ್ತಾಗಿದ್ದರೂ ಆ ಊರು ಮಾತ್ರ
ಅವರ ಅಧೀನದಲ್ಲಿರಲಿಲ್ಲ. ತಪ್ಪೂಹ ಎಂಬ ಊರು
ಮನಸ್ಸೆಕುಲದವರ ಪ್ರಾಂತ್ಯದ ಸೀಮೆಯಲ್ಲಿದ್ದರೂ ಅದು
ಎಫ್ರಾಯೀಮ್ ಜನರ ಸ್ವಾಸ್ತ್ಯದಲ್ಲಿತ್ತು. 9ಮನಸ್ಸೆ
ಪ್ರಾಂತ್ಯದ ಸೀಮೆ ದಕ್ಷಿಣದಲ್ಲಿ ಕಾನಾ ನದಿಯವರೆಗೆ
ಹೋಗುತ್ತದೆ. ಈ ಕ್ಷೇತ್ರ ಮನಸ್ಸೆ ಕುಲದವರ ಸ್ವಾಸ್ತ್ಯ
ದಲ್ಲಿದ್ದರೂ ಪಟ್ಟಣಗಳು ಎಫ್ರಾಯೀಮ್ ಜನರ ಸ್ವಾಸ್ತ್ಯ
ದಲ್ಲಿದ್ದವು. ಮನಸ್ಸೆ ಪ್ರಾಂತ್ಯದ ಸೀಮೆಯು ನದಿಯ
ಉತ್ತರದಿಕ್ಕಿನಿಂದ ಪಶ್ಚಿಮದಲ್ಲಿ ಮೆಡಿಟರೆನಿಯನ್
ಸಮುದ್ರದವರೆಗೆ ಮುಂದುವರೆದಿದೆ. 10ದಕ್ಷಿಣದ ಭೂಮಿ

ಎಫ್ರಾಯೀಮ್ ಜನರಿಗೆ ಸೇರಿದೆ. ಉತ್ತರದ ಭೂಮಿ ಮನಸ್ಸೆಯ ಜನರಿಗೆ ಸೇರಿದೆ. ಮೆಡಿಟರೆನಿಯನ್ ಸಮುದ್ರವು ಅದರ ಪಶ್ಚಿಮದ ಗಡಿಯಾಗಿತ್ತು. ಅದರ ಸೀಮೆಯು ಉತ್ತರದಲ್ಲಿ ಆಶೇರ್ ಕುಲದವರ ಪ್ರಾಂತ್ಯವನ್ನೂ ಪೂರ್ವದಲ್ಲಿ ಇಸ್ಸಾಕಾರ್ ಕುಲದವರ ನಾಡನ್ನೂ ಮುಟ್ಟುತ್ತದೆ.

11ಮನಸ್ಸೆ ಕುಲದವರು ಇಸ್ಸಾಕಾರ್, ಆಶೇರ್ ಪ್ರಾಂತಗಳಲ್ಲಿಯೂ ಕೆಲವು ಊರುಗಳನ್ನು ಹೊಂದಿದ್ದರು. ಬೇತ್‌ಷೆಯಾನ್, ಇಬ್ಲೆಯಾಮ್ ಮತ್ತು ಅವುಗಳ ಸುತ್ತಮುತ್ತಲಿನ ಸಣ್ಣ ಊರುಗಳು ಮನಸ್ಸೆಯ ಜನರ ಅಧೀನದಲ್ಲಿದ್ದವು. ಮನಸ್ಸೆಯ ಜನರು ದೋರ್, ಎಂದೋರ್, ತಾನಕ್, ಮೆಗಿದ್ದೋ ಮತ್ತು ಆ ಪಟ್ಟಣಗಳ ಸುತ್ತಮುತ್ತಲಿನ ಹಳ್ಳಿಗಳಲ್ಲಿಯೂ ವಾಸವಾಗಿದ್ದರು. ಅವರು ನಾಫೋತ್‌ನ ಮೂರು ಊರುಗಳಲ್ಲಿಯೂ ಇದ್ದರು. 12ಮನಸ್ಸೆ ಕುಲದವರಿಗೆ ಆ ಪಟ್ಟಣಗಳಲ್ಲಿದ್ದ ಜನರನ್ನು ಹೊರಡಿಸಲು ಸಾಧ್ಯವಾಗಲಿಲ್ಲ. ಆದುದರಿಂದ ಕಾನಾನ್ಯರು ಅಲ್ಲಿಯೇ ನೆಲೆಸಿದರು. 13ಆದರೆ ಸ್ವಲ್ಪ ಕಾಲದ ನಂತರ ಇಸ್ರೇಲರು ಬಲಶಾಲಿಗಳಾಗಿ ಕಾನಾನ್ಯರನ್ನು ತಮ್ಮ ಗುಲಾಮರನ್ನಾಗಿ ಮಾಡಿಕೊಂಡರು. ಆದರೆ ಅವರನ್ನು ಅಲ್ಲಿಂದ ಹೊರಗಟ್ಟಲಿಲ್ಲ.

14ಯೋಸೇಫನ ವಂಶಸ್ಥರು ಯೆಹೋಶುವನೊಂದಿಗೆ ಮಾತನಾಡಿ,“ನೀನು ನಮಗೆ ಸ್ವಾಸ್ತ್ಯದ ಒಂದು ಕ್ಷೇತ್ರವನ್ನು ಮಾತ್ರ ಕೊಟ್ಟಿರುವೆ. ಆದರೆ ನಾವು ಬಹಳ ಜನರಿದ್ದೇವೆ. ಯೆಹೋವನು ತನ್ನ ಜನರಿಗೆ ಕೊಟ್ಟ ಈ ದೇಶದಲ್ಲಿ ನೀನು ನಮಗೆ ಕೇವಲ ಒಂದು ಭಾಗವನ್ನು ಮಾತ್ರ ಏಕೆ ಕೊಟ್ಟೆ?” ಎಂದು ಕೇಳಿದರು.

15ಯೆಹೋಶುವನು, “ನಿಮ್ಮಲ್ಲಿ ಬಹಳ ಜನರಿದ್ದರೆ ಬೆಟ್ಟಪ್ರದೇಶಕ್ಕೆ ಹೋಗಿ ಆ ಭೂಮಿಯನ್ನು ತೆಗೆದುಕೊಳ್ಳಿರಿ. ಆ ಭೂಮಿಯು ಈಗ ಪೆರಿಜ್ಜೀಯರ ಮತ್ತು ರೆಫಾಯರ ಸ್ವತ್ತಾಗಿದೆ. ನಿಮಗೆ ಕೊಟ್ಟಿರುವ ಎಫ್ರಾಯೀಮ್ ಬೆಟ್ಟಪ್ರದೇಶವು ಚಿಕ್ಕದೆನಿಸಿದರೆ ಹೋಗಿ ಆ ಭೂಮಿಯನ್ನು ತೆಗೆದುಕೊಳ್ಳಿರಿ” ಎಂದನು.

16ಯೋಸೇಫನ ಜನರು, “ಎಫ್ರಾಯೀಮ್ ಬೆಟ್ಟಪ್ರದೇಶವು ನಮಗೆ ಸಾಕಾಗುವುದಿಲ್ಲ ಎಂಬುದೇನೊ ನಿಜ. ಆದರೆ ಅಲ್ಲಿ ವಾಸಮಾಡುವ ಕಾನಾನ್ಯರಲ್ಲಿ ಬಲವಾದ ಆಯುಧಗಳಿವೆ; ಕಬ್ಬಿಣದ ರಥಗಳಿವೆ. ಇಜ್ರೇಲ್, ಬೇತ್‌ಷೆಯಾನ್ ಕಣಿವೆಗಳು ಮತ್ತು ಆ ಕ್ಷೇತ್ರದ ಎಲ್ಲ ಸಣ್ಣ ಹಳ್ಳಿಗಳು ಅವರ ಅಧೀನದಲ್ಲಿವೆ” ಎಂದರು.

17ಆಗ ಯೆಹೋಶುವನು ಯೋಸೇಫನ ಮನೆತನದವನಾದ ಎಫ್ರಾಯೀಮನ ಮತ್ತು ಮನಸ್ಸೆಯ ಜನರಿಗೆ, “ನೀವು ಬಹಳಷ್ಟು ಜನರಿದ್ದೀರಿ. ನೀವು ಬಹಳ ಶಕ್ತಿಶಾಲಿಗಳಾಗಿದ್ದೀರಿ. ಆದ್ದರಿಂದ ನೀವು ದೇಶದ ಒಂದು ಪಾಲಿಗಿಂತಲೂ ಹೆಚ್ಚು ಪಡೆಯಬೇಕು. 18ನೀವು ಬೆಟ್ಟಪ್ರದೇಶವನ್ನು ತೆಗೆದುಕೊಳ್ಳಿರಿ. ಅದೊಂದು ಕಾಡು. ಆದರೆ ನೀವು ಆ ಮರಗಳನ್ನು ಕಡಿದುಹಾಕಿ ಅದನ್ನು ವಾಸಿಸಲು ಒಳ್ಳೆಯ ಸ್ಥಳವನ್ನಾಗಿ ಮಾಡಿಕೊಳ್ಳಬಹುದು. ನೀವು ಆ ಪ್ರದೇಶವನ್ನೆಲ್ಲಾ ನಿಮ್ಮ ಸ್ವತ್ತನ್ನಾಗಿ ಮಾಡಿಕೊಳ್ಳಿರಿ. ಆ ಪ್ರದೇಶವನ್ನು ಬಿಟ್ಟುಹೋಗುವಂತೆ ಕಾನಾನ್ಯರನ್ನು ಒತ್ತಾಯಿಸಿರಿ. ಅವರು ಶಕ್ತಿಯುತರಾಗಿದ್ದರೂ ಅವರ ಬಳಿ ಬಲವಾದ ಆಯುಧಗಳಿದ್ದರೂ ನೀವು ಅವರನ್ನು ಸೋಲಿಸುವಿರಿ” ಎಂದು ಹೇಳಿದನು.

### ಉಳಿದ ಭೂಮಿಯ ಹಂಚುವಿಕೆ

18 ಇಸ್ರೇಲರೆಲ್ಲರು ಶೀಲೋವಿನಲ್ಲಿ ಒಟ್ಟಾಗಿ ಸೇರಿದರು. ಆ ಸ್ಥಳದಲ್ಲಿ ಅವರು ದೇವದರ್ಶನ ಗುಡಾರವನ್ನು* ನಿಲ್ಲಿಸಿದರು. ಇಸ್ರೇಲರು ಆ ದೇಶವನ್ನು ಸ್ವಾಧೀನ ಮಾಡಿಕೊಂಡಿದ್ದರು. ಅವರು ಆ ದೇಶದ ಎಲ್ಲ ಶತ್ರುಗಳನ್ನು ಸೋಲಿಸಿದ್ದರು. 2ಆದರೂ ದೇವರು ವಾಗ್ದಾನ ಮಾಡಿದ ಭೂಮಿಯನ್ನು ಇಸ್ರೇಲರ ಏಳು ಕುಲಗಳು ಇನ್ನೂ ಪಡೆದಿರಲಿಲ್ಲ.

3ಆದುದರಿಂದ ಯೆಹೋಶುವನು ಇಸ್ರೇಲರಿಗೆ, “ನೀವು ನಿಮ್ಮ ಭೂಮಿಯನ್ನು ಪಡೆದುಕೊಳ್ಳಲು ಅಷ್ಟು ದೀರ್ಘಕಾಲದವರೆಗೆ ಏಕೆ ಕಾಯುತ್ತೀರಿ? ನಿಮ್ಮ ಪೂರ್ವಿಕರ ದೇವರಾದ ಯೆಹೋವನು ಈ ಭೂಮಿಯನ್ನು ನಿಮಗೆ ಕೊಟ್ಟಿದ್ದಾನೆ. 4ಆದ್ದರಿಂದ ಪ್ರತಿಯೊಂದು ಕುಲದಿಂದ ಮೂರು ಜನರನ್ನು ಆರಿಸಬೇಕು. ಭೂಮಿಯನ್ನು ಪರಿಶೀಲಿಸಲು ನಾನು ಅವರನ್ನು ಕಳುಹಿಸುತ್ತೇನೆ. ಅವರು ಭೂಮಿಯನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಅದರ ನಕ್ಷೆಯನ್ನು ಮಾಡಿ ನನ್ನ ಬಳಿಗೆ ತೆಗೆದುಕೊಂಡು ಬರಲಿ. 5ಅವರು ಆ ಭೂಮಿಯನ್ನು ಏಳು ಭಾಗಗಳಾಗಿ ವಿಂಗಡಿಸಲಿ. ಯೆಹೂದದ ಜನರು ದಕ್ಷಿಣದಲ್ಲಿ ತಮ್ಮ ಭೂಮಿಯನ್ನು ಇಟ್ಟುಕೊಳ್ಳಲಿ. ಯೋಸೇಫನ ಜನರು ಉತ್ತರದಲ್ಲಿ ತಮ್ಮ ಭೂಮಿಯನ್ನು ಇಟ್ಟುಕೊಳ್ಳಲಿ. 6ಆದರೆ ನೀವು ಒಂದು ನಕ್ಷೆಯನ್ನು ಮಾಡಿ ಭೂಮಿಯನ್ನು ಏಳು ಭಾಗಗಳಾಗಿ ವಿಂಗಡಿಸಬೇಕು. ಆ ನಕ್ಷೆಯನ್ನು ನನ್ನ ಬಳಿಗೆ ತೆಗೆದುಕೊಂಡು ಬನ್ನಿ. ಯಾವ ಗೋತ್ರದವರು ಯಾವ ಭೂಮಿಯನ್ನು ತೆಗೆದುಕೊಳ್ಳಬೇಕೆಂಬುದನ್ನು ನಮ್ಮ ದೇವರಾದ ಯೆಹೋವನು ನಿರ್ಣಯಿಸಲಿ. 7ಲೇವಿಯ ಕುಲದವರಿಗೆ ಭೂಮಿಯಲ್ಲಿ ಪಾಲು ದೊರೆಯುವುದಿಲ್ಲ. ಯಾಜಕರಾಗಿ ಯೆಹೋವನ ಸೇವೆ ಮಾಡುವುದೇ ಅವರ ಪಾಲು. ಗಾದ್ಯರು, ರೂಬೇನ್ಯರು ಮತ್ತು ಮನಸ್ಸೆಕುಲದ ಅರ್ಧಜನರು ವಾಗ್ದಾನ ಮಾಡಲಾದ ಭೂಮಿಯನ್ನು

---

**ದೇವದರ್ಶನದ ಗುಡಾರ** ಪವಿತ್ರವಾದ ಗುಡಾರ. ಇಸ್ರೇಲಿನ ಜನರು ದೇವರ ದರ್ಶನಕ್ಕಾಗಿ ಅಲ್ಲಿಗೆ ಹೋಗುತ್ತಿದ್ದರು.

ಈಗಾಗಲೇ ಪಡೆದುಕೊಂಡಿದ್ದಾರೆ. ಅವರು ಜೋರ್ಡನ್
ನದಿಯ ಪೂರ್ವದಿಕ್ಕಿನಲ್ಲಿದ್ದಾರೆ. ಯೆಹೋವನ ಸೇವಕ
ನಾದ ಮೋಶೆಯು ಈಗಾಗಲೇ ಆ ಭೂಮಿಯನ್ನು
ಅವರಿಗೆ ಕೊಟ್ಟಿದ್ದಾನೆ’’ ಎಂದನು.
8ಆದುದರಿಂದ ಭೂಮಿಯಲ್ಲಿ ಪರಿಶೀಲಿಸಲು ಆರಿಸ
ಲ್ಪಟ್ಟ ಜನರಿಗೆ ಯೆಹೋಶುವನು, ‘‘ಹೋಗಿ, ಭೂಮಿ
ಯನ್ನು ಸೂಕ್ಷ್ಮವಾಗಿ ಪರಿಶೀಲಿಸಿರಿ; ಅದರ ನಕ್ಷೆಗಳನ್ನು
ತೆಗೆಯಿರಿ. ಆಮೇಲೆ ಶೀಲೋವಿನಲ್ಲಿ ನಾನಿರುವ ಸ್ಥಳಕ್ಕೆ
ಬನ್ನಿ. ಆಗ ನಾನು ಚೀಟುಹಾಕುತ್ತೇನೆ. ಯೆಹೋವನು
ನಿಮ್ಮ ಪಾಲುಗಳನ್ನು ಕೊಡಲಿ’’ ಅಂದನು.
9ಅಂತೆಯೇ ಅವರು ಹೋಗಿ ಭೂಮಿಯನ್ನು ಚೆನ್ನಾಗಿ
ಪರಿಶೀಲಿಸಿದರು; ಯೆಹೋಶುವನಿಗಾಗಿ ನಕ್ಷೆಗಳನ್ನು ತೆಗೆ
ದರು. ಅವರು ಪ್ರತಿಯೊಂದು ಹಳ್ಳಿಯನ್ನು ಪರಿಶೀಲಿಸಿ
ದರು. ಭೂಮಿಯನ್ನು ಏಳು ಭಾಗಗಳಾಗಿ ವಿಂಗಡಿಸಿ
ದರು. ಅವರು ನಕ್ಷೆಗಳನ್ನು ತೆಗೆದು ಯೆಹೋಶುವನ
ಬಳಿಗೆ ಶೀಲೋವಿಗೆ ಹಿಂತಿರುಗಿ ಹೋದರು.
10ಯೆಹೋಶುವನು ಅವರಿಗಾಗಿ ಶೀಲೋವಿನಲ್ಲಿ
ಯೆಹೋವನ ಮುಂದೆ ಚೀಟುಹಾಕಿದನು. ಹೀಗೆ
ಯೆಹೋಶುವನು ಭೂಮಿಯನ್ನು ಹಂಚಿದನು; ಪ್ರತಿ
ಯೊಂದು ಕುಲಕ್ಕೆ ಅದರ ಭೂಭಾಗವನ್ನು ಕೊಟ್ಟನು.

## ಬೆನ್ಯಾಮೀನ್ಯರಿಗೆ ಭೂಭಾಗ

11ಬೆನ್ಯಾಮೀನ್ ಕುಲದವರಿಗೆ ಯೆಹೂದ್ಯರ ಮತ್ತು
ಯೋಸೇಫ್ಯರ ಪ್ರಾಂತ್ಯಗಳ ಮಧ್ಯದಲ್ಲಿರುವ ಭೂಮಿ
ಯನ್ನು ಕೊಡಲಾಯಿತು. ಬೆನ್ಯಾಮೀನ್ ಕುಲದ ಪ್ರತಿ
ಯೊಂದು ಗೋತ್ರವು ತಮ್ಮ ಭೂಮಿಯನ್ನು ಪಡೆದು
ಕೊಂಡಿತು. ಇದು ಬೆನ್ಯಾಮೀನ್ ಕುಲದವರಿಗೆ ಆರಿಸ
ಲ್ಪಟ್ಟ ಭೂಮಿಯಾಗಿತ್ತು. 12ಅದರ ಉತ್ತರದಿಕ್ಕಿನ
ಮೇರೆಯು ಜೋರ್ಡನ್ ನದಿಯಿಂದ ಆರಂಭ
ವಾಗುತ್ತದೆ. ಅದು ಜೆರಿಕೋವಿನ ಉತ್ತರ ಅಂಚಿನೊಂದಿಗೆ
ಹೊರಟು ಪಶ್ಚಿಮದ ಬೆಟ್ಟಪ್ರದೇಶದೊಳಗೆ ಹೋಗು
ತ್ತದೆ. ಆ ಸೀಮೆಯು ಬೇತಾವೆನಿನ ಪೂರ್ವದಿಕ್ಕಿಗೆ ಅತಿ
ಸಮೀಪದಲ್ಲಿ ಮುಂದುವರೆದು 13ದಕ್ಷಿಣದಲ್ಲಿರುವ
ಲೂಜಿಗೆ(ಬೇತೇಲ್‌ಗೆ) ಹೋಗುತ್ತದೆ. ಅಲ್ಲಿಂದ ಇಳಿದು
ಅಟಾರೋತದ್ದಾರ್‌ಗೆ ಹೋಗುತ್ತದೆ. ಅಟಾರೋತ
ದ್ದಾರ್ ಕೆಳಗಿನ ಬೇತ್‌ಹೋರೋನಿನ ದಕ್ಷಿಣದಲ್ಲಿರುವ
ಬೆಟ್ಟದ ಮೇಲೆ ಇದೆ. 14ಬೇತ್‌ಹೋರೋನಿನ ದಕ್ಷಿಣ
ದಲ್ಲಿರುವ ಬೆಟ್ಟದಿಂದ ಆ ಸೀಮೆಯು ದಕ್ಷಿಣಕ್ಕೆ ತಿರುಗಿ
ಕೊಂಡು ಆ ಬೆಟ್ಟದ ಪಶ್ಚಿಮ ಭಾಗದ ಜೊತೆಗೆ ಮುಂದು
ವರೆಯುತ್ತದೆ. ಆ ಸೀಮೆಯು ಕಿರ್ಯತ್ ಬಾಳ್‌ಗೆ
(ಕಿರ್ಯತ್ಯಾರೀಮ್) ಹೋಗುತ್ತದೆ. ಈ ಪಟ್ಟಣವು
ಯೆಹೂದ್ಯರಿಗೆ ಸೇರಿದ್ದು. ಇದು ಪಶ್ಚಿಮ ದಿಕ್ಕಿನ
ಸೀಮೆಯಾಗಿತ್ತು.
15ದಕ್ಷಿಣ ದಿಕ್ಕಿನ ಮೇರೆಯು ಕಿರ್ಯತ್ಯಾರೀಮಿನ
ಹತ್ತಿರದಿಂದ ಪ್ರಾರಂಭವಾಗಿ ನೆಪ್ತೋಹ ನದಿಯವರೆಗೆ
ಹೋಗುತ್ತದೆ. 16ಅಲ್ಲಿಂದ ಆ ಮೇರೆಯು ರೆಫಾಯಿಮ್
ತಗ್ಗಿನ ಉತ್ತರದಲ್ಲಿರುವ ಬೆನ್ ಹಿನ್ನೋಮ್ ತಗ್ಗಿನ ಹತ್ತಿರ
ಆ ಬೆಟ್ಟದ ಬುಡಕ್ಕೆ ಇಳಿಯುತ್ತದೆ. ಆ ಮೇರೆಯು
ಹಿನ್ನೋಮ್ ತಗ್ಗಿನಿಂದ ಯೆಬೂಸಿಯ ಪಟ್ಟಣದ ದಕ್ಷಿಣ
ದವರೆಗೆ ಮುಂದುವರೆಯುತ್ತದೆ. ಅಲ್ಲಿಂದ ಅದು
ಏನ್‌ರೋಗೆಲಿಗೆ ಬರುತ್ತದೆ. 17ಅಲ್ಲಿಂದ ಆ ಸೀಮೆಯು
ಉತ್ತರಕ್ಕೆ ತಿರುಗಿ ಏನ್‌ಷೆಮೆಸ್‌ಗೆ ಹೋಗುತ್ತದೆ. ಅದು
ಗೆಲೀಲೋತದವರೆಗೆ ಮುಂದುವರೆಯುತ್ತದೆ. (ಬೆಟ್ಟ
ಗಳಲ್ಲಿರುವ ಅದುಮ್ಮೀಮ್ ಎಂಬ ಇಕ್ಕಟ್ಟಾದ ಮಾರ್ಗದ
ಸಮೀಪದಲ್ಲಿದೆ ಗೆಲೀಲೋತ್.) ಆ ಸೀಮೆಯು
ರೂಬೇನನ ಮಗನಾದ ಬೋಹನನ ಹೆಸರಿನ ಮಹಾ
ಬಂಡೆಗೆ ಹೋಗುತ್ತದೆ. 18ಆ ಸೀಮೆಯು ಬೇತ್‌ಅರಾಬ
ಉತ್ತರಭಾಗಕ್ಕೆ ಮುಂದುವರೆದು ಅಲ್ಲಿಂದ ಅದು
ಜೋರ್ಡನ್ ಕಣಿವೆಗೆ ಇಳಿಯುತ್ತದೆ. 19ಅಲ್ಲಿಂದ ಆ
ಮೇರೆಯು ಬೇತ್‌ಹೊಗ್ಲಾವಿನ ಉತ್ತರಭಾಗದಲ್ಲಿ
ಮುಂದುವರೆದು ಲವಣಸಮುದ್ರದ ಉತ್ತರದಡದಲ್ಲಿ
ಮುಕ್ತಾಯಗೊಳ್ಳುತ್ತದೆ. ಜೋರ್ಡನ್ ನದಿಯು
ಸಮುದ್ರಕ್ಕೆ ಸೇರುವುದು ಇಲ್ಲಿಯೇ. ಇದು ದಕ್ಷಿಣದಿಕ್ಕಿನ
ಸೀಮೆ.
20ಜೋರ್ಡನ್ ನದಿಯು ಅವರ ಪೂರ್ವದಿಕ್ಕಿನ
ಮೇರೆ. ಬೆನ್ಯಾಮೀನ್ ಗೋತ್ರಗಳ ಸ್ವಾಸ್ತ್ಯದ ಸುತ್ತಲಿನ
ಮೇರೆಯು ಇದೇ. 21ಬೆನ್ಯಾಮೀನ್ ಗೋತ್ರಗಳಿಗೆ
ದೊರಕಿದ ಪಟ್ಟಣಗಳು: ಯೆರಿಕೋ, ಬೇತ್‌ಹೊಗ್ಲಾ,
ಏಮೆಕ್ಕೆಚ್ಚೀಚ್, 22ಬೇತ್‌ಅರಾಬಾ, ಚೆಮಾರಯಿಮ್,
ಬೇತೇಲ್, 23ಅವ್ವೀಮ್, ಪಾರಾ, ಒಪ್ರಾ, 24ಕೆಫೆರ್,
ಅಮ್ಮೋನ್ಯ, ಒಫ್ನಿ ಮತ್ತು ಗೆಬಾ ಎಂಬ ಹನ್ನೆರಡು
ನಗರಗಳು ಮತ್ತು ಅವುಗಳ ಸುತ್ತಮುತ್ತಲಿನ
ಹೊಲಗದ್ದೆಗಳು.
25ಬೆನ್ಯಾಮೀನ್ ಕುಲದವರು ಹದಿನಾಲ್ಕು ಊರು
ಗಳನ್ನು ಮತ್ತು ಅವುಗಳ ಸುತ್ತಮುತ್ತಲಿನ ಹೊಲ
ಗದ್ದೆಗಳನ್ನು ಪಡೆದುಕೊಂಡರು. ಆ ಊರುಗಳು ಇಂತಿವೆ:
ಗಿಬ್ಯೋನ್, ರಾಮಾ, ಬೇರೋತ್, 26ಮಿಚ್ಪೆ, ಕೆಫೀರಾ,
ಮೋಚಾ, 27ರೆಕೆಮ್, ಇರ್ಪೇಲ್, ತರಲಾ, 28ಚೇಲ,
ಎಲೆಫ್, ಯೆಬೂಸಿಯರ ಪಟ್ಟಣ (ಜೆರುಸಲೇಮ್),
ಗಿಬೆಯತ್ ಮತ್ತು ಕಿರ್ಯತ್ ಬೆನ್ಯಾಮೀನ್ ಗೋತ್ರ
ಗಳವರು ಈ ಪ್ರದೇಶಗಳನ್ನೆಲ್ಲ ಪಡೆದುಕೊಂಡರು.

## ಸಿಮೆಯೋನ್ ಕುಲದವರಿಗೆ ಭೂಮಿ

19 ಅನಂತರ ಯೆಹೋಶುವನು ಸಿಮೆಯೋನ್
ಕುಲದ ಎಲ್ಲ ಗೋತ್ರಗಳಿಗೆ ಅವರ ಪಾಲಿನ
ಭೂಮಿಯನ್ನು ಕೊಟ್ಟನು. ಅವರಿಗೆ ಸಿಕ್ಕ ಭೂಮಿಯು

ಯೆಹೂದ ಕುಲದವರಿಗೆ ಸೇರಿದ ಭೂಬಾಗದ ಮಧ್ಯ
ದಲ್ಲಿತ್ತು. 2ಅವರಿಗೆ ದೊರೆತ ಭಾಗವಿದು: ಬೇರ್ಷೆಬ
(ಶೆಬ), ಮೋಲಾದಾ, 3ಹಚರ್‌ಷೂವಾಲ್, ಬಾಲಾ,
ಎಚೆಮ್, 4ಎಲ್ತೋಲದ್, ಬೆತೂಲ್, 5ಹೊರ್ಮಾ,
5ಚಿಕ್ಲಗ್, ಬೇತ್-ಮರ್ಕಾಬೋತ್, ಹಚರ್‌ಸೂಸಾ,
6ಬೇತ್‌ಲೆಬಾವೋತ್ ಮತ್ತು ಶಾರೂಹೆನ್ ಎಂಬ ಹದಿ
ಮೂರು ಪಟ್ಟಣಗಳು ಮತ್ತು ಅವುಗಳ ಸುತ್ತಮುತ್ತಲಿನ
ಎಲ್ಲ ಹೊಲಗದ್ದೆಗಳು.

7ಆಯಿನ್, ರಿಮ್ಮೋನ್, ಏತೆರ್, ಆಷಾನ್ ಎಂಬ
ನಾಲ್ಕು ಪಟ್ಟಣಗಳು ಮತ್ತು ಅವುಗಳ ಸುತ್ತಮುತ್ತಲಿನ ಎಲ್ಲ
ಹೊಲಗದ್ದೆಗಳನ್ನು ಅವರು ಪಡೆದುಕೊಂಡರು.
8ಬಾಲತ್‌ಬೇರನ (ನೆಗೇವದಲ್ಲಿದ್ದ ರಾಮ) ವರೆಗೆ
ಹಬ್ಬಿದ ಎಲ್ಲ ಪಟ್ಟಣಗಳ ಸುತ್ತಲಿನ ಹೊಲಗದ್ದೆಗಳನ್ನು ಸಹ
ಅವರು ಪಡೆದುಕೊಂಡರು. ಇದೇ ಸಿಮೆಯೋನ್
ಕುಲದವರಿಗೆ ದೊರೆತ ಭಾಗವಾಗಿತ್ತು. ಪ್ರತಿಯೊಂದು
ಗೋತ್ರದವರು ತಮ್ಮ ಭೂಮಿಯನ್ನು ಪಡೆದು
ಕೊಂಡರು. 9ಸಿಮೆಯೋನ್ಯರ ಭೂಮಿಯು ಯೆಹೂದದ
ಭೂಮಿಯ ಒಂದು ಭಾಗವಾಗಿತ್ತು. ಯೆಹೂದ್ಯರಿಗೆ
ಅವರ ಅವಶ್ಯಕತೆಗಿಂತ ಹೆಚ್ಚು ಭೂಮಿ ಇದ್ದಕಾರಣ
ಸಿಮೆಯೋನ್ಯರು ಅದರಲ್ಲಿ ಒಂದು ಭಾಗವನ್ನು
ಪಡೆದುಕೊಂಡರು.

## ಜೆಬುಲೂನ್ಯರಿಗೆ ಭೂಮಿ

10ತರುವಾಯ ತಮ್ಮ ಪಾಲಿನ ಭೂಮಿಯನ್ನು
ಪಡೆದವರು ಜೆಬುಲೂನ್ ಕುಲದವರು. ಜೆಬುಲೂನ್
ಕುಲದ ಪ್ರತಿಯೊಂದು ಗೋತ್ರಕ್ಕೆ ವಾಗ್ದಾನದ ಪ್ರಕಾರ
ಭೂಮಿಯನ್ನು ಕೊಡಲಾಯಿತು. ಜೆಬುಲೂನ್ಯರ
ಪ್ರದೇಶವು ಸಾರೀದಿನವರೆಗೂ ವಿಸ್ತರಿಸಿತ್ತು. 11ಅಲ್ಲಿಂದ
ಅದು ಪಶ್ಚಿಮಕ್ಕೆ ಮರ್ಗಲಾಕ್ಕೆ ಹೋಗಿ ದಬ್ಬೆಷತನ್ನು
ತಲುಪುತ್ತದೆ. ಅಲ್ಲಿಂದ ಯೊಕ್ನೆಯಾಮ್ ಊರಿನ ಈಚೆ
ಇರುವ ಹಳ್ಳಕ್ಕೆ ಹೋಗುತ್ತದೆ. 12ಅಲ್ಲಿಂದ ಅದು ಪೂರ್ವಕ್ಕೆ
ತಿರುಗಿಕೊಂಡು ಸಾರೀದಿನಿಂದ ಕಿಸ್ಲೋತ್ ತಾಬೋರಿಗೆ
ಹೋಗುತ್ತದೆ. ಅಲ್ಲಿಂದ ಅದು ದಾಬೆರತ್ ಮತ್ತು
ಯಾಫೀಯಕ್ಕೆ ಹೋಗುತ್ತದೆ. 13ಅಲ್ಲಿಂದ ಪೂರ್ವಕ್ಕೆ
ಮುಂದುವರೆದು ಗತ್‌ಹೇಫೆರ್ ಮತ್ತು ಎತ್‌ಕಾಚೀನಿನ
ಮೇಲಿಂದ ರಿಮ್ಮೋನಿಗೆ ತಲುಪಿ ಅಲ್ಲಿಂದ ತಿರುಗಿಕೊಂಡು
'ನೇಯ'ಕ್ಕೆ ಹೋಗುತ್ತದೆ. 14'ನೇಯ'ದಿಂದ ಅದು
ತಿರುಗಿಕೊಂಡು ಉತ್ತರದಿಕ್ಕಿನ ಹನ್ನಾತೋನಿನ ಮೇಲಿಂದ
ಇಫ್ತಹೇಲಿನ ಕಣಿವೆಗೆ ಹೋಗುತ್ತದೆ. 15ಕಟ್ಟಾತ್,
ನಹಲ್ಲಾಲ್, ಶಿಮ್ರೋನ್, ಇದಲ್ಲಾ, ಬೇತ್ಲೆಹೇಮ್ ಇವೇ
ಮೊದಲಾದ ಹನ್ನೆರಡು ಪಟ್ಟಣಗಳು ಮತ್ತು ಅವುಗಳ
ಸುತ್ತಮುತ್ತಲಿನ ಹೊಲಗದ್ದೆಗಳು ಈ ಸೀಮೆಯಲ್ಲಿ
ಸೇರಿವೆ.

16ಈ ಪಟ್ಟಣಗಳನ್ನು ಮತ್ತು ಅವುಗಳ ಸುತ್ತ ಮುತ್ತಲಿನ
ಹೊಲಗದ್ದೆಗಳನ್ನು ಜೆಬುಲೂನ್ಯರಿಗೆ ಕೊಡಲಾಯಿತು.
ಜೆಬುಲೂನ್ಯರ ಪ್ರತಿಯೊಂದು ಗೋತ್ರದವರು ತಮ್ಮ
ಪಾಲಿನ ಭೂಮಿಯನ್ನು ಪಡೆದರು.

## ಇಸ್ಸಾಕಾರರಿಗೆ ಭೂಮಿ

17ಭೂಮಿಯ ನಾಲ್ಕನೆಯ ಭಾಗವನ್ನು ಇಸ್ಸಾಕಾರ್
ಕುಲದವರಿಗೆ ಕೊಡಲಾಯಿತು. ಆ ಕುಲದ ಪ್ರತಿಯೊಂದು
ಗೋತ್ರದವರು ತಮ್ಮ ಪಾಲಿನ ಭೂಮಿಯನ್ನು ಪಡೆದರು.
18ಈ ಭೂಮಿಯನ್ನು ಆ ಕುಲದವರಿಗೆ ಕೊಡಲಾಯಿತು:
ಇಜ್ರೇಲ್, ಕೆಸುಲ್ಲೋತ್, ಶೂನೇಮ್, 19ಹಫಾರ-
ಯಿಮ್, ಶೀಯೋನ್, ಅನಾಹರತ್, 20ರಬ್ಬೀತ್,
ಕಿಷ್ಯೋನ್, ಎಬೆಜ್, 21ರೆಮೆತ್, ಏಂಗನ್ನೀಮ್,
ಏನ್‌ಹದ್ದಾ ಮತ್ತು ಬೇತ್ ಪಚ್ಚೇಚ್.

22ಅವರ ಭೂಮಿಯ ಮೇರೆಯು ತಾಬೋರ್,
ಶಹಚೀಮಾ, ಬೇತ್‌ಷೆಮೆಷ್ ಎಂಬ ಊರುಗಳನ್ನು ತಲು
ಪಿತ್ತು. ಆ ಸೀಮೆಯು ಜೋರ್ಡನ್ ನದಿಗೆ ಮುಕ್ತಾಯ
ಗೊಳ್ಳುತ್ತಿತ್ತು. ಒಟ್ಟಿನಲ್ಲಿ ಹದಿನಾರು ಪಟ್ಟಣಗಳು ಮತ್ತು
ಅವುಗಳ ಸುತ್ತಮುತ್ತಲಿನ ಹೊಲಗದ್ದೆಗಳು ಇದರ
ಲ್ಲಿದ್ದವು. 23ಈ ನಗರಗಳು ಮತ್ತು ಪಟ್ಟಣಗಳು ಇಸ್ಸಾ
ಕಾರ್ ಕುಲದವರಿಗೆ ಕೊಟ್ಟ ಭೂಮಿಯ ಭಾಗ
ಗಳಾಗಿದ್ದವು. ಪ್ರತಿಯೊಂದು ಗೋತ್ರದವರು ತಮ್ಮ
ಪಾಲಿನ ಭೂಮಿಯನ್ನು ಪಡೆದರು.

## ಆಶೇರ್ ಕುಲದವರಿಗೆ ಭೂಮಿ

24ಭೂಮಿಯ ಐದನೆಯ ಭಾಗವನ್ನು ಆಶೇರ್
ಕುಲದವರಿಗೆ ಕೊಡಲಾಯಿತು. ಆ ಕುಲದ ಪ್ರತಿಯೊಂದು
ಗೋತ್ರದವರು ಭೂಮಿಯಲ್ಲಿ ತಮ್ಮ ಪಾಲನ್ನು ಪಡೆದು
ಕೊಂಡರು. 25ಆ ಕುಲದವರಿಗೆ ಕೊಟ್ಟ ಭೂಮಿಯಿದು:
ಹೆಲ್ಕತ್, ಹಲೀ, ಬೆಟೆನ್, ಆಕ್ಷಾಫ್, 26ಅಲಮ್ಮೆಲೆಕ್,
ಅಮಾದ್ ಮತ್ತು ಮಿಷಾಲ್.

ಇದರ ಪಶ್ಚಿಮ ಮೇರೆಯು ಕರ್ಮೆಲ್ ಬೆಟ್ಟ ಮತ್ತು
ಶೀಹೋರ್‌ಲಿಬ್ನತ್‌ವರೆಗೆ ಚಾಚಿಕೊಂಡಿತ್ತು. 27ಅಲ್ಲಿಂದ
ಅದರ ಸೀಮೆಯು ಪೂರ್ವಕ್ಕೆ ತಿರುಗಿಕೊಂಡು ಬೇತ್-
ದಾಗೋನಿಗೆ ಹೋಗಿತ್ತು. ಆ ಸೀಮೆಯು ಜೆಬುಲೂನ್ಯರ
ಮೇರೆಗೂ ಮತ್ತು ಇಪ್ತಹೇಲ್ ಕಣಿವೆಗೂ ತಲುಪಿತ್ತು.
ಅಲ್ಲಿಂದ ಅದು ಬೇತ್‌ಏಮೆಕ್ ಮತ್ತು 'ನೆಗೀಯೆಲ್ 'ನ
ಉತ್ತರಕ್ಕೆ ಮುಂದುವರಿದು ಕಾಬೂಲಿನ ಉತ್ತರ
ಭಾಗವನ್ನು ದಾಟಿತ್ತು. 28ಅಲ್ಲಿಂದ ಆ ಮೇರೆಯು
ಅಬ್ದೋನ್,* ರೆಹೋಬ್, ಹಮ್ಮೋನ್ ಮತ್ತು ಕಾನಾ
ಇವುಗಳ ಮೂಲಕ ಚೀದೋನ್ ಎಂಬ ಮಹಾನಗರಕ್ಕೆ
ತಲುಪಿತ್ತು. 29ಅಲ್ಲಿಂದ ಆ ಸೀಮೆಯು ದಕ್ಷಿಣದಿಕ್ಕಿಗೆ

**ಅಬ್ದೋನ್** ಅಥವಾ ''ಎಬ್ರೋನ್''

ಹಿಂತಿರುಗಿ ರಾಮಾವನ್ನು ತಲುಪಿ,ಅಲ್ಲಿಂದ ಸುಭದ್ರ
ನಗರವಾದ ತೂರ್‌ಗೆ ಮುಂದುವರೆದು ಅಲ್ಲಿಂದ ತಿರುಗಿ
ಕೊಂಡು ಹೋಸಾಕ್ಕೆ ತಲುಪುತ್ತದೆ. ಅಲ್ಲಿಂದ ಅಕ್ಜೀಬ್,
30ಉಮ್ಮಾ, ಅಫೆಕ್‌ಮತ್ತು ರೆಹೋಬ್ ಹತ್ತಿರ ಸಮುದ್ರ
ದಲ್ಲಿ ಕೊನೆಗೊಳ್ಳುತ್ತದೆ.
ಒಟ್ಟಿನಲ್ಲಿ ಇಪ್ಪತ್ತೆರಡು ಪಟ್ಟಣಗಳು ಮತ್ತು ಅವುಗಳ
ಸುತ್ತಮುತ್ತಲಿನ ಹೊಲಗದ್ದೆಗಳು ಇದರಲ್ಲಿ ಸೇರಿದ್ದವು.
31ಈ ನಗರಗಳು ಮತ್ತು ಅವುಗಳ ಸುತ್ತಮುತ್ತಲಿನ
ಹೊಲಗದ್ದೆಗಳು ಆಶೇರ್ ಕುಲದವರಿಗೆ ಕೊಡಲಾಗಿತ್ತು.
ಆ ಕುಲದ ಪ್ರತಿಯೊಂದು ಕುಟುಂಬವು ತನ್ನ ಪಾಲಿನ
ಭೂಭಾಗವನ್ನು ಪಡೆಯಿತು.

### ನಫ್ತಾಲಿ ಕುಲದವರಿಗೆ ಭೂಮಿ

32ಭೂಮಿಯ ಆರನೆಯ ಭಾಗವನ್ನು ನಫ್ತಾಲಿ
ಕುಲದವರಿಗೆ ಕೊಡಲಾಯಿತು. ಆ ಕುಲದ ಪ್ರತಿಯೊಂದು
ಕುಟುಂಬವು ತನ್ನ ಭೂಭಾಗವನ್ನು ಪಡೆಯಿತು. 33ಅವರ
ಭೂಮಿಯ ಮೇರೆಯು ಚಾನನ್ನೀಮಿನ ಹತ್ತಿರ ಇರುವ
ದೊಡ್ಡ ಮರದಿಂದ ಆರಂಭವಾಗುತ್ತದೆ. ಇದು ಹೇಲೆಫಿನ
ಹತ್ತಿರ ಇದೆ. ಬಳಿಕ ಆ ಮೇರೆಯು ಅದಾಮೀನೆಕೆಬ್
ಮತ್ತು ಯಬ್ನೆಯೇಲ್ ಇವುಗಳ ಮೂಲಕ ಲಕ್ಕೂಮಿಗೆ
ಹೋಗಿ, ಜೋರ್ಡನ್ ನದಿಯ ತೀರದಲ್ಲಿ ಮುಕ್ತಾಯ
ಗೊಂಡಿತು. 34ಅಲ್ಲಿಂದ ಆ ಮೇರೆಯು ಆಜ್ನೋತ್
ತಾಬೋರಿನ ಮೂಲಕ ಹುಕ್ಕೋಕಿಗೆ ಹೋಗಿ ನಿಲ್ಲುತ್ತದೆ.
ಅದರ ದಕ್ಷಿಣದ ಮೇರೆ ಜೆಬುಲೂನ್ಯರ ಮೇರೆಗೂ
ಪಶ್ಚಿಮದ ಮೇರೆ ಅಶೇರ್‍ಯರ ಮೇರೆಗೂ ಹೊಂದಿ
ಕೊಂಡಿದೆ. ಆ ಮೇರೆಯು ಪೂರ್ವದಿಕ್ಕಿನಲ್ಲಿ
ಜೋರ್ಡನ್ ನದಿಯ ಬಳಿಯಿದ್ದ ಯೆಹೂದಕ್ಕೂ
ಹೋಯಿತು. 35ಈ ಸೀಮೆಯ ಒಳಗಡೆ ಕೆಲವು ಅತಿ
ಭದ್ರವಾದ ಪಟ್ಟಣಗಳಿದ್ದವು. ಆ ಪಟ್ಟಣಗಳೆಂದರೆ:
ಚಿದ್ದೀಮ್, ಚೇರ್, ಹಮ್ಮತ್, ರಕ್ಕತ್, ಕಿನ್ನೆರೆತ್,
36ಅದಾಮಾ, ರಾಮಾ, ಹಾಚೋರ್, 37ಕೆದೆಷ್, ಎದ್ರೈ,
ಏನ್‌ಹಾಚೋರ್, 38ಇರೋನ್, ಮಿಗ್ದಲೇಲ್,
ಹೊರೇಮ್, ಬೇತನಾತ್ ಮತ್ತು ಬೇತ್‌ಷೆಮೆಷ್ ಎಂಬ
ವುಗಳು. ಒಟ್ಟಿನಲ್ಲಿ ಹತ್ತೊಂಭತ್ತು ಪಟ್ಟಣಗಳು ಮತ್ತು
ಅವುಗಳ ಸುತ್ತಮುತ್ತಲಿನ ಎಲ್ಲ ಹೊಲಗದ್ದೆಗಳು.
39ಈ ನಗರಗಳನ್ನು ಮತ್ತು ಅವುಗಳ ಸುತ್ತಮುತ್ತಲಿನ
ಹೊಲಗದ್ದೆಗಳನ್ನು ನಫ್ತಾಲಿ ಕುಲದವರಿಗೆ ಕೊಡ
ಲಾಗಿತ್ತು. ಆ ಕುಲದ ಪ್ರತಿಯೊಂದು ಗೋತ್ರದವರು ತಮ್ಮ
ಪಾಲಿನ ಭೂಮಿಯನ್ನು ಪಡೆದುಕೊಂಡರು.

### ದಾನ್ ಕುಲದವರಿಗೆ ಭೂಮಿ

40ಆಮೇಲೆ ದಾನ್ ಕುಲದವರಿಗೆ ಭೂಮಿಯನ್ನು
ಕೊಡಲಾಯಿತು. ಆ ಕುಲದ ಪ್ರತಿಯೊಂದು ಕುಟುಂಬವು
ತನ್ನ ಭೂಮಿಯನ್ನು ಪಡೆಯಿತು. 41ಅವರಿಗೆ ಕೊಟ್ಟ
ಊರುಗಳು: ಚೊರ್ಗಾ, ಎಷ್ಟಾವೋಲ್, ಈರ್ಷೆಮೆಷ್,
42ಶಾಲಬ್ಬೀನ್, ಅಯ್ಯಾಲೋನ್, ಇತ್ಲಾ, 43ಏಲೋನ್,
ತಿಮ್ನಾ, ಎಕ್ರೋನ್, 44ಎಲ್ತೆಕೇ, ಗಿಬ್ಬೆತೋನ್,
ಬಾಲತ್, 45ಯೆಹುದ್, ಬೆನೇಬೆರಕ್, ಗತ್-
ರಿಮ್ಮೋನ್, 46ಮೇಯರ್ಕೋನ್, ಮತ್ತು ರಕ್ಕೋನ್,
ಯೊಪ್ಪಕ್ಕೆ ಹತ್ತಿರದ ಪ್ರದೇಶಗಳೂ ಇವರಿಗೆ ದೊರೆತವು
47ದಾನ್‌ಕುಲದವರು ತಮ್ಮ ಪ್ರಾಂತ್ಯವನ್ನು ವಿಸ್ತರಿಸು
ವಲ್ಲಿ ಕಷ್ಟಪಡಬೇಕಾಯಿತು. ಅಲ್ಲಿ ಅವರಿಗೆ ಬಲಿಷ್ಠರಾದ
ವೈರಿಗಳಿದ್ದರು. ದಾನ್ ಕುಲದವರು ಅವರನ್ನು ಸುಲಭ
ವಾಗಿ ಸೋಲಿಸಲಾಗಲಿಲ್ಲ. ಆದುದರಿಂದ ಅವರು
ಲೆಷೆಮ್ ಜನರೊಡನೆ ಯುದ್ಧಮಾಡಿ ಅವರನ್ನು
ಸಂಹರಿಸಿ ಲೆಷೆಮ್ ಪಟ್ಟಣದಲ್ಲಿ ನೆಲೆಸಿದರು. ಅದಕ್ಕೆ ತಮ್ಮ
ಮೂಲಪುರುಷನ ಹೆಸರಾದ ದಾನ್ ಎಂಬ ಹೆಸರ
ನ್ನಿಟ್ಟರು. 48ಈ ಎಲ್ಲ ನಗರಗಳನ್ನು ಮತ್ತು ಅವುಗಳ
ಸುತ್ತಮುತ್ತಲಿನ ಹೊಲಗದ್ದೆಗಳನ್ನು ದಾನ್‌ಕುಲದವರಿಗೆ
ಕೊಡಲಾಯಿತು. ಪ್ರತಿಯೊಂದು ಗೋತ್ರದವರು ತಮ್ಮ
ಪಾಲಿನ ಭೂಮಿಯನ್ನು ಪಡೆದುಕೊಂಡರು.

### ಯೆಹೋಶುವನಿಗೆ ಭೂಮಿ

49ಹೀಗೆ ದೇಶವನ್ನು ಆಯಾ ಕುಲಗಳವರಿಗೆ
ನಾಯಕರು ಹಂಚಿಕೊಟ್ಟರು. ಆಗ ಇಸ್ರೇಲರು ನೂನನ
ಮಗನಾದ ಯೆಹೋಶುವನಿಗೂ ಸ್ವಲ್ಪ ಭೂಮಿಯನ್ನು
ಕೊಡಬೇಕೆಂದು ನಿರ್ಧರಿಸಿದರು. ಈ ಭೂಮಿಯನ್ನು
ಅವನಿಗೆ ಕೊಡುವುದಾಗಿ ವಾಗ್ದಾನ ಮಾಡಲಾಗಿತ್ತು. 50ಆ
ಭೂಮಿಯನ್ನು ಕೊಡಬೇಕೆಂಬುದು ಯೆಹೋವನ
ಆಜ್ಞೆಯಾಗಿತ್ತು. ಆದುದರಿಂದ ಅವರು ಯೆಹೋಶುವನ
ಅಪೇಕ್ಷೆಯಂತೆ ಎಫ್ರಾಯೀಮ್ಯರ ಬೆಟ್ಟಪ್ರದೇಶ
ದಲ್ಲಿರುವ ತಿಮ್ನತ್‌ಸೆರಹ ಎಂಬ ಪಟ್ಟಣವನ್ನು ಅವನಿಗೆ
ಕೊಟ್ಟರು. ಯೆಹೋಶುವನು ಆ ಪಟ್ಟಣವನ್ನು ಭದ್ರ
ಗೊಳಿಸಿ ಅಲ್ಲಿ ವಾಸವಾಗಿದ್ದನು.
51ಯಾಜಕನಾದ ಎಲ್ಲಾಜಾರನೂ ನೂನನ ಮಗನಾದ
ಯೆಹೋಶುವನೂ ಇಸ್ರೇಲಿನ ಕುಲಪ್ರಧಾನರೂ
ಶೀಲೋವಿನಲ್ಲಿ ಸೇರಿಬಂದು ದೇವದರ್ಶನಗುಡಾರದ
ಬಾಗಿಲಲ್ಲಿ ಯೆಹೋವನ ಸನ್ನಿಧಿಯಲ್ಲೇ ಚೀಟುಹಾಕಿ
ಹಂಚಿಕೊಟ್ಟ ಪ್ರಾಂತ್ಯಗಳೇ ಇವು. ಹೀಗೆ ದೇಶವಿಭಾಗ
ಕಾರ್ಯವು ಪೂರ್ಣಗೊಂಡಿತು.

### ಆಶ್ರಯನಗರಗಳು

20 ತರುವಾಯ ಯೆಹೋವನು ಯೆಹೋಶುವ
ನಿಗೆ, 2“ನಾನು ಮೋಶೆಯ ಮೂಲಕ ನಿನಗೆ
ಆಜ್ಞಾಪಿಸಿದಂತೆ ಕೆಲವು ನಗರಗಳನ್ನು ವಿಶೇಷ ಆಶ್ರಯ
ನಗರಗಳನ್ನಾಗಿ ಗೊತ್ತುಪಡಿಸು. 3ನಿಮ್ಮಲ್ಲಿ ಒಬ್ಬನು

ತಿಳಿಯದೆ ಅಕಸ್ಮಾತ್ತಾಗಿ ನರಹತ್ಯಮಾಡಿದರೆ ಅವನು
ಯಾವುದಾದರೊಂದು ಆಶ್ರಯನಗರಕ್ಕೆ ಹೋಗಿ ಅಡಗಿ
ಕೊಳ್ಳಲಿ.
[4]‘‘ಆಶ್ರಯನಗರಕ್ಕೆ ಓಡಿಹೋದವನು ಆ ಪಟ್ಟಣದ
ಪ್ರವೇಶದ್ವಾರದಲ್ಲಿ ನಿಂತು ಅಲ್ಲಿಯ ಜನನಾಯಕರಿಗೆ
ನಡೆದ ಸಂಗತಿಯನ್ನು ತಿಳಿಸಲಿ. ಆಗ ನಾಯಕರು ಅವನಿಗೆ
ನಗರವನ್ನು ಪ್ರವೇಶಿಸಲು ಅನುಮತಿ ಕೊಡಲಿ; ತಮ್ಮ
ಜೊತೆಯಲ್ಲಿ ವಾಸಿಸಲು ಒಂದು ಸ್ಥಳವನ್ನು ಕೊಡಲಿ.
[5]ಆದರೆ ಅವನನ್ನು ಬೆನ್ನಟ್ಟಿಕೊಂಡು ಬಂದವನು
ಆಶ್ರಯನಗರಕ್ಕೆ ಬಂದರೆ, ಆ ನಗರದ ನಾಯಕರು
ಕೊಂದವನನ್ನು ಬೆನ್ನಟ್ಟಿ ಬಂದವನ ಕೈಗೆ ಒಪ್ಪಿಸಬಾರದು.
ಆಶ್ರಯಕೋರಿ ಅವರಲ್ಲಿಗೆ ಬಂದ ವ್ಯಕ್ತಿಯನ್ನು ಅವರು
ರಕ್ಷಿಸಬೇಕು. ಯಾಕಂದರೆ ಆ ನರಹತ್ಯವು ಆಕಸ್ಮಿಕ
ವಾದದ್ದೇ ಹೊರತು ದ್ವೇಷದಿಂದ ಮಾಡಿದ್ದಲ್ಲ. [6]ಆ
ನಗರದ ನ್ಯಾಯಾಸ್ಥಾನದಲ್ಲಿ ನ್ಯಾಯನಿರ್ಣಯವಾಗು
ವವರೆಗೂ ಮತ್ತು ಮಹಾಯಾಜಕನು ಜೀವದಿಂದ ಇರು
ವವರೆಗೂ ಅವನು ಅಲ್ಲಿಯೇ ಇರಬೇಕು. ತರುವಾಯ
ಅವನು ತಾನು ಬಿಟ್ಟುಬಂದ ಊರಿನ ತನ್ನ ಮನೆಗೆ
ಹೋಗಬಹುದು’’ ಎಂದು ಹೇಳಿದನು.
[7]ಆದ್ದರಿಂದ ಇಸ್ರೇಲರು ‘‘ಆಶ್ರಯನಗರಗಳನ್ನಾಗಿ’’
ಕೆಲವು ನಗರಗಳನ್ನು ಆರಿಸಿದರು.

ನಫ್ತಾಲಿ ಕುಲದವರ ಪರ್ವತ ಪ್ರದೇಶವಾದ ಗಲಿ
ಲಾಯ ಪ್ರಾಂತ್ಯದಲ್ಲಿನ ಕೆದೆಷ್; ಎಫ್ರಾಯೀಮ್
ಪರ್ವತ ಪ್ರದೇಶದಲ್ಲಿನ ಶೆಕೆಮ್; ಯೆಹೂದ್ಯರ
ಬೆಟ್ಟದ ಸೀಮೆಯಲ್ಲಿನ ಕಿರ್ಯತರ್ಬ
(ಹೆಬ್ರೋನ್);
8 ಜೆರಿಕೋವಿನ ಹತ್ತಿರ ಜೋರ್ಡನ್ ನದಿಯ
ಪೂರ್ವದಲ್ಲಿದ್ದ ರೂಬೇನ್ಯರ ಪ್ರಾಂತ್ಯದ ಅರಣ್ಯ
ಪ್ರದೇಶದಲ್ಲಿನ ಬೆಚೆರ್, ಗಾದ್ಯರಿಗೆ ಸೇರಿದ
ಗಿಲ್ಯಾದ್ ಪ್ರಾಂತ್ಯದಲ್ಲಿನ ರಾಮೋತ್; ಮನಸ್ಸೆ
ಯವರಿಗೆ ಸೇರಿದ ಬಾಷಾನಿನಲ್ಲಿರುವ
ಗೋಲಾನ್. ಇವೇ ಆ ಆಶ್ರಯನಗರಗಳು.

[9]ಇಸ್ರೇಲಿನವನಾಗಲಿ ಅಥವಾ ಅವರೊಂದಿಗೆ ಇರುವ
ಒಬ್ಬ ಪರದೇಶಿಯನಾಗಲಿ ಆಕಸ್ಮಾತ್ತಾಗಿ ನರಹತ್ಯ
ಮಾಡಿದ್ದರೆ ಒಂದು ಆಶ್ರಯನಗರಕ್ಕೆ ಓಡಿಹೋಗಲು
ಅವಕಾಶವಿತ್ತು. ಯಾವನೇ ಆಗಲಿ ಮತ್ತೊಬ್ಬನನ್ನು
ಅಕಸ್ಮಾತ್ತಾಗಿ ಕೊಂದರೆ ಆ ಪಟ್ಟಣಗಳಲ್ಲಿ ಆಶ್ರಯ
ಪಡೆಯಬಹುದಾಗಿತ್ತು; ಅಲ್ಲಿ ಸುರಕ್ಷಿತವಾಗಿ ವಾಸಿಸಬಹು
ದಾಗಿತ್ತು. ಬೆನ್ನಟ್ಟಿ ಬಂದವನು ಅವನನ್ನು ಕೊಲ್ಲಲು
ಸಾಧ್ಯವಿರಲಿಲ್ಲ. ಕೊಲೆ ಮಾಡಿದವನಿಗೆ ಆ ಪಟ್ಟಣದ
ನ್ಯಾಯಾಲಯವೇ ತೀರ್ಪು ನೀಡುತ್ತಿತ್ತು.

## ಯಾಜಕರಿಗೆ ಮತ್ತು ಲೇವಿಕುಲದವರಿಗೆ ಪಟ್ಟಣಗಳು

21 ಲೇವಿಕುಲಾಧಿಪತಿಗಳು ಮಾತಾಡುವುದಕ್ಕಾಗಿ
ಯಾಜಕನಾದ ಎಲ್ಲಾಜಾರನ, ನೂನನ ಮಗ
ನಾದ ಯೆಹೋಶುವನ ಮತ್ತು ಇಸ್ರೇಲಿನ ಬೇರೆ ಕುಲಾ
ಧಿಪತಿಗಳ ಬಳಿಗೆ ಹೋದರು. [2]ಇದು ಕಾನಾನ್ ದೇಶದ
ಶೀಲೋವಿನಲ್ಲಿ ನಡೆಯಿತು. ಲೇವಿ ಕುಲಾಧಿಪತಿಗಳು
ಅವರಿಗೆ, ‘‘ಯೆಹೋವನು ಮೋಶೆಗೆ ಆಜ್ಞಾಪಿಸಿರುವಂತೆ
ನೀವು ನಮಗೆ ವಾಸಮಾಡುವುದಕ್ಕೆ ಪಟ್ಟಣಗಳನ್ನೂ ನಮ್ಮ
ಪಶುಗಳು ಮೇಯುವುದಕ್ಕಾಗಿ ಹೊಲಗಳನ್ನೂ ಕೊಡ
ಬೇಕು’’ ಎಂದು ಹೇಳಿದರು. [3]ಇಸ್ರೇಲರು ಯೆಹೋವನ
ಈ ಆಜ್ಞೆಯನ್ನು ಪಾಲಿಸಿದರು. ಅವರು ಲೇವಿಯರಿಗೆ ಈ
ಪಟ್ಟಣಗಳನ್ನು ಮತ್ತು ಅವರ ಪಶುಗಳಿಗಾಗಿ ಅವುಗಳ
ಸುತ್ತಮುತ್ತಲಿನ ಭೂಮಿಯನ್ನು ಕೊಟ್ಟರು;
[4]ಕೆಹಾತ್ಯರ ಒಂದು ಭಾಗಕ್ಕೆ ಯೆಹೂದ, ಸಿಮೆಯೋನ್
ಮತ್ತು ಬೆನ್ಯಾಮೀನ್ ಕುಲಗಳ ಭೂಭಾಗದಿಂದ ಹದಿ
ಮೂರು ಪಟ್ಟಣಗಳನ್ನು ಕೊಡಲಾಯಿತು, ಕೆಹಾತ್ಯರು
ಲೇವಿಕುಲದವನೂ ಯಾಜಕನೂ ಆದ ಆರೋನನ
ಸಂತತಿಯವರಾಗಿದ್ದರು.
[5]ಉಳಿದೆಲ್ಲ ಕೆಹಾತ್ಯರಿಗೆ ಎಫ್ರಾಯೀಮ್, ದಾನ್
ಮತ್ತು ಮನಸ್ಸೆಯ ಅರ್ಧಕುಲದ ಪ್ರದೇಶಗಳಿಂದ ಹತ್ತು
ಪಟ್ಟಣಗಳನ್ನು ಕೊಡಲಾಯಿತು. [6]ಗೇರ್ಷೋನ್ಯ
ಕುಟುಂಬದವರಿಗೆ ಹದಿಮೂರು ಪಟ್ಟಣಗಳನ್ನು ಕೊಡ
ಲಾಯಿತು. ಈ ಪಟ್ಟಣಗಳು ಇಸ್ಸಾಕಾರ್, ಅಶೇರ್,
ನಫ್ತಾಲಿ ಮತ್ತು ಬಾಷಾನಿನಲ್ಲಿರುವ ಮನಸ್ಸೆಯ ಅರ್ಧ
ಕುಲದವರಿಗೆ ಸೇರಿದ ಪ್ರದೇಶಗಳಲ್ಲಿದ್ದವು.
[7]ಮೆರಾರೀ ಕುಟುಂಬದವರಿಗೆ ಹನ್ನೆರಡು ಪಟ್ಟಣ
ಗಳನ್ನು ಕೊಡಲಾಯಿತು. ಈ ಹನ್ನೆರಡು ಪಟ್ಟಣಗಳು
ರೂಬೇನ್, ಗಾದ್ ಮತ್ತು ಜೆಬುಲೂನ್ ಕುಲಗಳಿಗೆ
ಸೇರಿದ ಪ್ರದೇಶಗಳಲ್ಲಿದ್ದವು.
[8]ಹೀಗೆ ಇಸ್ರೇಲರು ಲೇವಿಯವರಿಗೆ ಈ ಪಟ್ಟಣಗಳನ್ನು
ಮತ್ತು ಅವುಗಳ ಸುತ್ತಮುತ್ತಲಿನ ಹೊಲಗದ್ದೆಗಳನ್ನು
ಕೊಟ್ಟರು; ಯೆಹೋವನು ಮೋಶೆಗೆ ಕೊಟ್ಟ ಆಜ್ಞೆಯನ್ನು
ಪಾಲಿಸಿದರು.
[9]ಯೆಹೂದ ಮತ್ತು ಸಿಮೆಯೋನ್ ಕುಲದವರ
ಪ್ರದೇಶಗಳಲ್ಲಿ ಬರುವ ಪಟ್ಟಣಗಳ ಹೆಸರುಗಳು ಇಂತಿವೆ:
[10]ಪಟ್ಟಣಗಳನ್ನು ಆರಿಸಿಕೊಳ್ಳುವ ಮೊದಲ ಅಧಿಕಾರ
ವನ್ನು ಕೆಹಾತ್ಯ ಕುಟುಂಬದ ಲೇವಿಯರಿಗೆ ಕೊಡ
ಲಾಯಿತು. [11]ಅವರಿಗೆ ಕಿರ್ಯತರ್ಬ ನಗರ (ಇದು
ಹೆಬ್ರೋನ್. ಇದಕ್ಕೆ ಅನಾಕನ ತಂದೆಯಾದ ಅರ್ಬನ
ಹೆಸರಿಡಲಾಗಿತ್ತು.) ಮತ್ತು ಅವರ ಪಶುಗಳಿಗಾಗಿ ಆ
ನಗರದ ಹತ್ತಿರದ ಸ್ವಲ್ಪ ಭೂಮಿಯನ್ನು ಕೊಡಲಾಯಿತು.
[12]ಆದರೆ ಕಿರ್ಯತರ್ಬ ನಗರದ ಸುತ್ತಮುತ್ತಲಿನ ಸಣ್ಣಸಣ್ಣ

ಊರುಗಳು ಮತ್ತು ಅವುಗಳಿಗೆ ಸೇರಿದ ಭೂಮಿಯು
ಯೆಪುನ್ನೆಯ ಮಗನಾದ ಕಾಲೇಬನಿಗೆ ಸೇರಿತ್ತು. 13ಆದ್ದ
ರಿಂದ ಆರೋನನ ಸಂತತಿಯವರಿಗೆ ಹೆಬ್ರೋನ್
ನಗರವನ್ನು ಕೊಡಲಾಯಿತು. (ಹೆಬ್ರೋನ್ ಒಂದು
ಆಶ್ರಯನಗರವಾಗಿತ್ತು.) ಆರೋನನ ಸಂತತಿಯವರಿಗೆ
ಅವರು ಲಿಬ್ನಾ, 14ಯತ್ತೀರ್, ಎಷ್ಟೆಮೋಹ,
15ಹೋಲೋನ್, ದೆಬೀರ್, 16ಆಯಿನ್, ಯುಟ್ಟಾ
ಮತ್ತು ಬೇತ್‌ಷೆಮೆಷ್ ಎಂಬ ಪಟ್ಟಣಗಳನ್ನು ಸಹ
ಕೊಟ್ಟರು. ಅವರ ಪಶುಗಳಿಗಾಗಿ ಪಟ್ಟಣಗಳ ಸಮೀಪ
ದಲ್ಲಿದ್ದ ಭೂಮಿಯನ್ನು ಸಹ ಕೊಟ್ಟರು. ಈ ಎರಡು
ಗುಂಪುಗಳಿಗೆ ಅವರು ಒಂಭತ್ತು ಪಟ್ಟಣಗಳನ್ನು
ಕೊಟ್ಟರು.
17ಬೆನ್ಯಾಮೀನ್ ಕುಲದವರಿಗೆ ಸೇರಿದ ನಗರಗಳನ್ನು
ಸಹ ಆರೋನನ ಸಂತತಿಯವರಿಗೆ ಕೊಡಲಾಯಿತು. ಅವು
ಯಾವುವೆಂದರೆ: ಗಿಬ್ಯೋನ್, ಗೆಬ, 18ಅನಾತೋತ್
ಮತ್ತು ಅಲ್ಮೋನ್. ಈ ನಾಲ್ಕು ಪಟ್ಟಣಗಳನ್ನೂ ಅವರ
ಪಶುಗಳಿಗಾಗಿ ಆ ಪಟ್ಟಣಗಳ ಸಮೀಪದಲ್ಲಿದ್ದ ಸ್ವಲ್ಪ
ಭೂಮಿಯನ್ನೂ ಅವರಿಗೆ ಕೊಡಲಾಯಿತು. 19ಒಟ್ಟಿನಲ್ಲಿ
ಯಾಜಕರಿಗೆ ಅವರು ಹದಿಮೂರು ಪಟ್ಟಣಗಳನ್ನು
ಕೊಟ್ಟರು. (ಎಲ್ಲಾ ಯಾಜಕರು ಆರೋನನ ಸಂತತಿ
ಯವರು.) ಅವರ ಪಶುಗಳಿಗಾಗಿ ಪಟ್ಟಣದ ಸಮೀಪ
ದಲ್ಲಿದ್ದ ಸ್ವಲ್ಪ ಭೂಮಿಯನ್ನು ಅವರಿಗೆ ಕೊಡಲಾಯಿತು.
20ಕೆಹಾತ್ಯರ ಕುಟುಂಬಕ್ಕೆ ಸೇರಿದ ಇತರ ಜನರಿಗೆ
ಎಫ್ರಾಯೀಮ್ ಕುಲದವರ ಪ್ರದೇಶದಿಂದ ಕೆಲವು
ಪಟ್ಟಣಗಳನ್ನು ಕೊಡಲಾಯಿತು. ಅವರು ಪಡೆದ
ಪಟ್ಟಣಗಳು ಇವು: 21ಎಫ್ರಾಯೀಮ್ ಪ್ರದೇಶದ ಬೆಟ್ಟದ
ಲ್ಲಿರುವ ಶೆಕೆಮ್, (ಶೆಕೆಮ್ ಆಶ್ರಯನಗರವಾಗಿತ್ತು.)
ಗೆಜೆರ್, 22ಕಿಬ್‌ಚೈಮ್ ಮತ್ತು ಬೇತ್‌ಹೋರೋನ್.
ಒಟ್ಟಿನಲ್ಲಿ ಎಫ್ರಾಯೀಮ್ಯರು ಅವರಿಗೆ ನಾಲ್ಕು
ಪಟ್ಟಣಗಳನ್ನೂ ಅವರ ಪಶುಗಳಿಗಾಗಿ ಆ ಪಟ್ಟಣಗಳ
ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನೂ ಕೊಟ್ಟರು.
23ದಾನ್ ಕುಲದವರು ಅವರಿಗೆ ಎಲ್ತೆಕೇ,
ಗಿಬ್ಬೆತೋನ್, 24ಅಯ್ಯಾಲೋನ್ ಮತ್ತು ಗತ್-
ರಿಮ್ಮೋನ್ ಎಂಬ ನಾಲ್ಕು ಪಟ್ಟಣಗಳನ್ನು ಮತ್ತು ಅವರ
ಪಶುಗಳಿಗಾಗಿ ಪ್ರತಿಯೊಂದು ಪಟ್ಟಣದ ಸುತ್ತಮುತ್ತಲಿನ
ಸ್ವಲ್ಪ ಭೂಮಿಯನ್ನು ಕೊಟ್ಟರು.
25ಮನಸ್ಸೆ ಕುಲದ ಅರ್ಧಜನರು ಅವರಿಗೆ ತಾನಾಕ್
ಮತ್ತು ಗತ್‌ರಿಮ್ಮೋನ್ ಎಂಬ ಪಟ್ಟಣಗಳನ್ನು ಕೊಟ್ಟರು.
ಒಟ್ಟಿನಲ್ಲಿ ಮನಸ್ಸೆಕುಲದ ಅರ್ಧಜನರು ಅವರಿಗೆ ಎರಡು
ಪಟ್ಟಣಗಳನ್ನು ಮತ್ತು ಅವರ ಪಶುಗಳಿಗಾಗಿ ಪ್ರತಿ
ಯೊಂದು ಪಟ್ಟಣದ ಸುತ್ತಮುತ್ತಲಿನ ಸ್ವಲ್ಪ ಭೂಮಿ
ಯನ್ನು ಕೊಟ್ಟರು.
26ಕೆಹಾತ್ಯ ಕುಟುಂಬದ ಉಳಿದ ಜನರು ಒಟ್ಟಿನಲ್ಲಿ
ಹತ್ತು ಪಟ್ಟಣಗಳನ್ನು ಮತ್ತು ತಮ್ಮ ಪಶುಗಳಿಗಾಗಿ ಪ್ರತಿ
ಯೊಂದು ಪಟ್ಟಣದ ಸುತ್ತಮುತ್ತಲಿನ ಸ್ವಲ್ಪ ಭೂಮಿ
ಯನ್ನು ಪಡೆದರು.
27ಲೇವಿಯ ಸಂತತಿಯವರಾದ ಗೇರ್ಷೋನ್ಯರಿಗೆ ಈ
ಊರುಗಳನ್ನು ಕೊಡಲಾಯಿತು:
ಮನಸ್ಸೆ ಕುಲದ ಅರ್ಧಜನರು ಅವರಿಗೆ ಬಾಷಾನಿ
ನಲ್ಲಿದ್ದ ಗೋಲಾನ್ ನಗರವನ್ನು ಕೊಟ್ಟರು.
(ಗೋಲಾನ್ ಆಶ್ರಯನಗರವಾಗಿತ್ತು.) ಮನಸ್ಸೆ
ಯವರು ಬೆಯೆಷ್ಟೆರಾವನ್ನು ಸಹ ಅವರಿಗೆ ಕೊಟ್ಟರು.
ಒಟ್ಟಿನಲ್ಲಿ ಈ ಮನಸ್ಸೆಕುಲದ ಅರ್ಧಜನರು ಎರಡು
ಪಟ್ಟಣಗಳನ್ನು ಮತ್ತು ಅವರ ಪಶುಗಳಿಗಾಗಿ ಆ ಪಟ್ಟಣಗಳ
ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನು ಕೊಟ್ಟರು.
28ಇಸ್ಸಾಕಾರ್ ಕುಲದವರು ಕಿಷ್ಯೋನ್, ದಾಬೆರತ್,
29ಯರ್ಮೂತ್, ಏಂಗನ್ನೀಮ್ ಎಂಬ ಪಟ್ಟಣಗಳನ್ನು
ಕೊಟ್ಟರು. ಒಟ್ಟಿನಲ್ಲಿ ಇಸ್ಸಾಕಾರ್‌ಕುಲದವರು ಅವರಿಗೆ
ನಾಲ್ಕು ಪಟ್ಟಣಗಳನ್ನು ಮತ್ತು ಅವರ ಪಶುಗಳಿಗಾಗಿ ಆ
ಪಟ್ಟಣಗಳ ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನು
ಕೊಟ್ಟರು.
30ಆಶೇರ್ ಕುಲದವರು ಮಿಷಾಲ್ , ಅಬ್ದೋನ್,
31ಹೆಲ್ಕಾತ್, ರೆಹೋಬ್‌ಗಳನ್ನು ಕೊಟ್ಟರು. ಒಟ್ಟಿನಲ್ಲಿ
ಆಶೇರರು ಅವರಿಗೆ ನಾಲ್ಕು ಪಟ್ಟಣಗಳನ್ನು ಮತ್ತು ಅವರ
ಪಶುಗಳಿಗಾಗಿ ಪ್ರತಿಯೊಂದು ಪಟ್ಟಣದ ಸುತ್ತಮುತ್ತಲಿನ
ಸ್ವಲ್ಪ ಭೂಮಿಯನ್ನು ಕೊಟ್ಟರು.
32ನಫ್ತಾಲಿ ಕುಲದವರು ಗಲಿಲಾಯದ ಕೆದೆಷ್,
(ಕೆದೆಷ್ ಆಶ್ರಯನಗರವಾಗಿತ್ತು.) ಹಮ್ಮೋತ್
ದೋರ್, ಕರ್ತಾನ್ ಎಂಬವುಗಳನ್ನು ಕೊಟ್ಟರು. ಒಟ್ಟಿ
ನಲ್ಲಿ ನಫ್ತಾಲಿಯರು ಮೂರು ಪಟ್ಟಣಗಳನ್ನು ಮತ್ತು
ಅವರ ಪಶುಗಳಿಗಾಗಿ ಆ ಪಟ್ಟಣಗಳ ಸುತ್ತಮುತ್ತಲಿನ ಸ್ವಲ್ಪ
ಭೂಮಿಯನ್ನು ಕೊಟ್ಟರು.
33ಒಟ್ಟಿನಲ್ಲಿ ಗೇರ್ಷೋನ್ಯರಿಗೆ ಹದಿಮೂರು ಪಟ್ಟಣ
ಗಳು ಮತ್ತು ಅವರ ಪಶುಗಳಿಗಾಗಿ ಆ ಪಟ್ಟಣಗಳ ಸುತ್ತ
ಮುತ್ತಲಿನ ಸ್ವಲ್ಪ ಭೂಮಿಯು ಸಿಕ್ಕಿತು.
34ಲೇವಿಯರ ಮತ್ತೊಂದು ಗೋತ್ರವು ಮೆರಾರೀ
ಎಂಬುದು. ಆ ಗೋತ್ರಕ್ಕೆ ದೊರೆತ ಪಟ್ಟಣಗಳು ಇಂತಿವೆ:
ಜೆಬುಲೂನ್ ಕುಲದವರು ಅವರಿಗೆ ಯೊಕ್ನೀಮ್,
ಕರ್ತಾ, 35ದಿಮ್ನಾ, ನಹಲಾಲ್‌ಗಳನ್ನು ಕೊಟ್ಟರು. ಒಟ್ಟಿ
ನಲ್ಲಿ ಜೆಬುಲೂನ್ಯರು ಅವರಿಗೆ ನಾಲ್ಕು ಪಟ್ಟಣಗಳನ್ನು
ಮತ್ತು ಅವರ ಪಶುಗಳಿಗಾಗಿ ಪ್ರತಿಯೊಂದು ಪಟ್ಟಣದ
ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನು ಕೊಟ್ಟರು.
36ರೂಬೇನ್ಯರು ಅವರಿಗೆ ಬೆಚೆರ್, ಯಹಚಾ, 37ಕೆದೇ
ಮೋತ್, ಮೇಫಾಗತ್ ಪಟ್ಟಣಗಳನ್ನು ಕೊಟ್ಟರು.
ಒಟ್ಟಿನಲ್ಲಿ ರೂಬೇನ್ಯರು ಅವರಿಗೆ ನಾಲ್ಕು ಪಟ್ಟಣಗಳನ್ನು

ಮತ್ತು ಅವರ ಪಶುಗಳಿಗಾಗಿ ಪ್ರತಿಯೊಂದು ಪಟ್ಟಣದ
ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನು ಕೊಟ್ಟರು.
38ಗಾದ್ಯರು ಅವರಿಗೆ ಗಿಲ್ಯಾದಿನ ರಾಮೋತ್,
(ರಾಮೋತ್ ಆಶ್ರಯನಗರವಾಗಿತ್ತು) ಮಹನ
ಯೀಮ್, 39ಹೆಷ್ಬೋನ್, ಯಗ್ಜೇರ್ ಪಟ್ಟಣಗಳನ್ನು
ಕೊಟ್ಟರು. ಒಟ್ಟಿನಲ್ಲಿ ಗಾದ್ಯರು ಅವರಿಗೆ ನಾಲ್ಕು
ಪಟ್ಟಣಗಳನ್ನು ಮತ್ತು ಅವರ ಪಶುಗಳಿಗಾಗಿ ಪ್ರತಿ
ಯೊಂದು ಪಟ್ಟಣಗಳ ಸುತ್ತಮುತ್ತಲಿನ ಸ್ವಲ್ಪ ಭೂಮಿ
ಯನ್ನು ಕೊಟ್ಟರು.
40ಲೇವಿಯರ ಕೊನೆಯ ಗೋತ್ರದವರಾದ ಮೆರಾರೀ
ಯರು ಒಟ್ಟಿನಲ್ಲಿ ಹನ್ನೆರಡು ಪಟ್ಟಣಗಳನ್ನು ಪಡೆದು
ಕೊಂಡರು.
41ಹೀಗೆ ಲೇವಿಯರು ಒಟ್ಟಿನಲ್ಲಿ ನಲವತ್ತೆಂಟು ಪಟ್ಟಣ
ಗಳನ್ನು ಮತ್ತು ತಮ್ಮ ಪಶುಗಳಿಗಾಗಿ ಪ್ರತಿಯೊಂದು
ಪಟ್ಟಣದ ಸುತ್ತಮುತ್ತಲಿನ ಸ್ವಲ್ಪ ಭೂಮಿಯನ್ನು ಪಡೆ
ದರು. ಈ ಎಲ್ಲ ಪಟ್ಟಣಗಳು ಬೇರೆ ಕುಲದವರ ಪ್ರದೇಶ
ಗಳಲ್ಲಿದ್ದವು. 42ಪ್ರತಿಯೊಂದು ಪಟ್ಟಣದಲ್ಲಿ ಪಶುಗಳಿ
ಗಾಗಿ ಸ್ವಲ್ಪ ಭೂಮಿ ಇತ್ತು. ಇದು ಪ್ರತಿಯೊಂದು
ಪಟ್ಟಣಕ್ಕೂ ಅನ್ವಯಿಸುತ್ತಿತ್ತು.
43ಹೀಗೆ ಯೆಹೋವನು ಇಸ್ರೇಲರಿಗೆ ಮಾಡಿದ ತನ್ನ
ವಾಗ್ದಾನವನ್ನು ಪೂರ್ಣಗೊಳಿಸಿದನು. ಆತನು ಅವರಿಗೆ
ವಾಗ್ದಾನ ಮಾಡಿದ ದೇಶವನ್ನು ಕೊಟ್ಟನು. ಅವರು
ಅದನ್ನು ಹಂಚಿಕೊಂಡು ವಾಸವಾಗಿದ್ದರು.
44ಯೆಹೋವನು ಅವರ ಪೂರ್ವಿಕರಿಗೆ ಪ್ರಮಾಣ ಮಾಡಿ
ದಂತೆ ಅವರ ಪ್ರದೇಶದಲ್ಲೆಲ್ಲಾ ಶಾಂತಿ ನೆಲೆಸುವಂತೆ
ಮಾಡಿದನು. ಅವರ ಯಾವ ಶತ್ರುಗಳೂ ಅವರನ್ನು
ಸೋಲಿಸಲಿಲ್ಲ. ಇಸ್ರೇಲರು ತಮ್ಮ ಎಲ್ಲ ಶತ್ರುಗಳನ್ನು
ಸೋಲಿಸುವಂತೆ ಯೆಹೋವನು ಮಾಡಿದನು.
45ಯೆಹೋವನು ಇಸ್ರೇಲರಿಗೆ ಮಾಡಿದ ಪ್ರತಿಯೊಂದು
ವಾಗ್ದಾನವನ್ನು ನೆರವೇರಿಸಿದನು. ಆತನು ಕಾರ್ಯ
ರೂಪಕ್ಕೆ ತರದ ವಾಗ್ದಾನವೇ ಉಳಿಯಲಿಲ್ಲ. ಪ್ರತಿ
ಯೊಂದು ವಾಗ್ದಾನವೂ ನೆರವೇರಿತು.

## ಮೂರು ಕುಲದವರು ತಮ್ಮ ಮನೆಗಳಿಗೆ ಹೋದರು

22 ತರುವಾಯ ಯೆಹೋಶುವನು ರೂಬೇನ್ಯರನ್ನು
ಗಾದ್ಯರನ್ನು ಮತ್ತು ಮನಸ್ಸೆಯ ಅರ್ಧಕುಲದ
ವರನ್ನು ಒಟ್ಟಿಗೆ ಸೇರಿಸಿದನು. 2ಯೆಹೋಶುವನು
ಅವರಿಗೆ,‘‘ಯೆಹೋವನ ಸೇವಕನಾಗಿದ್ದ ಮೋಶೆಯು
ಮಾಡಬೇಕೆಂದು ನಿಮಗೆ ಹೇಳಿದ್ದನ್ನೆಲ್ಲಾ ನೀವು ಮಾಡಿ
ದಿರಿ; ಮತ್ತು ನನ್ನ ಆಜ್ಞೆಗಳನ್ನೆಲ್ಲ ನೀವು ಪಾಲಿಸಿದಿರಿ.
3ಈವರೆಗೆ ನೀವು ಇಸ್ರೇಲಿನ ಉಳಿದ ಜನರಿಗೆಲ್ಲ ಬೆಂಬಲ
ಕೊಟ್ಟಿದ್ದೀರಿ. ನಿಮ್ಮ ದೇವರಾದ ಯೆಹೋವನು ಕೊಟ್ಟ
ಎಲ್ಲ ಆಜ್ಞೆಗಳನ್ನು ನೀವು ಜಾಗರೂಕತೆಯಿಂದ ಪಾಲಿಸಿ
ದ್ದೀರಿ. 4ನಿಮ್ಮ ದೇವರಾದ ಯೆಹೋವನು ಇಸ್ರೇಲರಿಗೆ
ಶಾಂತಿಯನ್ನು ದಯಪಾಲಿಸುವುದಾಗಿ ವಾಗ್ದಾನ ಮಾಡಿ
ದ್ದನು. ಈಗ ಯೆಹೋವನು ತನ್ನ ವಾಗ್ದಾನವನ್ನು ಪೂರ್ಣ
ಗೊಳಿಸಿದ್ದಾನೆ. ಆದುದರಿಂದ ಈಗ ನೀವು ನಿಮ್ಮ ಮನೆ
ಗಳಿಗೆ ಹೋಗಬಹುದು. ಯೆಹೋವನ ಸೇವಕನಾದ
ಮೋಶೆಯು ನಿಮಗೆ ಜೋರ್ಡನ್ ನದಿಯ ಪೂರ್ವಕ್ಕೆ
ಸ್ವಾಸ್ತ್ಯವನ್ನು ಕೊಟ್ಟಿದ್ದಾನೆ. ಈಗ ನೀವು ಆ ಪ್ರದೇಶದ
ಲ್ಲಿರುವ ನಿಮ್ಮ ಮನೆಗಳಿಗೆ ಹೋಗಬಹುದು. 5ಆದರೆ
ಮೋಶೆಯು ನಿಮಗೆ ಕೊಟ್ಟ ಧರ್ಮೋಪದೇಶವನ್ನು
ಮತ್ತು ವಿಧಿಗಳನ್ನು ಪಾಲಿಸಬೇಕೆಂಬುದನ್ನು ಜ್ಞಾಪಕ
ದಲ್ಲಿಡಿ. ನೀವು ನಿಮ್ಮ ದೇವರಾದ ಯೆಹೋವನನ್ನು ನಿಮ್ಮ
ಪೂರ್ಣ ಹೃದಯದಿಂದಲೂ ಪ್ರಾಣದಿಂದಲೂ ಪ್ರೀತಿಸ
ಬೇಕು ಮತ್ತು ಆತನ ಸೇವೆ ಮಾಡಬೇಕು. ನೀವು ಆತನನ್ನು
ಅನುಸರಿಸುತ್ತಾ ನಿಮ್ಮಿಂದ ಸಾಧ್ಯವಾದಷ್ಟು ಆತನ ಸೇವೆ
ಮಾಡಬೇಕು’’ ಎಂದು ಹೇಳಿದನು.
6ಯೆಹೋಶುವನು ಅವರನ್ನು ಆಶೀರ್ವದಿಸಿ
ಬೀಳ್ಕೊಟ್ಟನು. ಅವರು ತಮ್ಮತಮ್ಮ ಮನೆಗಳಿಗೆ
ಹೋದರು. 7ಮೋಶೆಯು ಮನಸ್ಸೆಕುಲದ ಅರ್ಧಜನರಿಗೆ
ಬಾಷಾನ್ ಪ್ರದೇಶವನ್ನು ಕೊಟ್ಟಿದ್ದನು. ಯೆಹೋಶು
ವನು ಮನಸ್ಸೆಕುಲದ ಉಳಿದರ್ಧ ಜನರಿಗೆ ಜೋರ್ಡನ್
ನದಿಯ ಪಶ್ಚಿಮಕ್ಕೆ ಭೂಮಿಯನ್ನು ಕೊಟ್ಟನು.
ಯೆಹೋಶುವನು ಅವರನ್ನು ಆಶೀರ್ವದಿಸಿ ಮನೆಗೆ
ಕಳುಹಿಸಿದನು.
8ಅವನು, ‘‘ನೀವು ಬಹಳ ಶ್ರೀಮಂತರಾಗಿದ್ದೀರಿ,
ನಿಮ್ಮಲ್ಲಿ ಬಹಳ ಪಶುಗಳಿವೆ; ನಿಮ್ಮಲ್ಲಿ ಚಿನ್ನ, ಬೆಳ್ಳಿ ಮತ್ತು
ಬೆಲೆಬಾಳುವ ರತ್ನಾಭರಣಗಳಿವೆ. ನಿಮ್ಮಲ್ಲಿ ಸುಂದರವಾದ
ಅನೇಕ ಬಟ್ಟೆಗಳಿವೆ. ನೀವು ನಿಮ್ಮ ಶತ್ರುಗಳಿಂದ
ಹಲವಾರು ವಸ್ತುಗಳನ್ನು ತೆಗೆದುಕೊಂಡಿದ್ದೀರಿ. ಈ ವಸ್ತು
ಗಳನ್ನು ನಿಮ್ಮ ಸಹೋದರರೊಂದಿಗೂ ಹಂಚಿ ಕೊಳ್ಳಿರಿ’’
ಅಂದನು.
9ಆದುದರಿಂದ ರೂಬೇನ್‌ಕುಲದವರು, ಗಾದ್ಯರು,
ಮನಸ್ಸೆಕುಲದವರು ಇಸ್ರೇಲಿನ ಬೇರೆ ಕುಲದ ಜನರನ್ನು
ಬಿಟ್ಟು ಹೊರಟರು. ಅವರು ಕಾನಾನಿನ ಶೀಲೋವಿ
ನಲ್ಲಿದ್ದರು. ಅವರು ಆ ಸ್ಥಳವನ್ನು ಬಿಟ್ಟು ಗಿಲ್ಯಾದ್‌ಗೆ
ಹಿಂದಿರುಗಿ ಹೋದರು. ಮೋಶೆಯು ಅವರಿಗೆ ಸ್ವಾಸ್ತ್ಯ
ವಾಗಿ ಕೊಟ್ಟಿದ್ದ ತಮ್ಮ ಪ್ರದೇಶಕ್ಕೆ ಅವರು ಹೋದರು.
ಅವರಿಗೆ ಈ ಪ್ರದೇಶವನ್ನು ಕೊಡಬೇಕೆಂದು
ಯೆಹೋವನು ಮೋಶೆಗೆ ಆಜ್ಞಾಪಿಸಿದ್ದನು.
10ಆಗ ರೂಬೇನ್ಯರು, ಗಾದ್ಯರು ಮತ್ತು ಮನಸ್ಸೆಕುಲ
ದವರು ಗೆಲಿಲೋತ್ ಎಂಬ ಸ್ಥಳಕ್ಕೆ ಹೋದರು. ಇದು
ಕಾನಾನ್ ಪ್ರದೇಶದಲ್ಲಿ ಜೋರ್ಡನ್ ನದಿಯ ಹತ್ತಿರ
ಇತ್ತು. ಆ ಸ್ಥಳದಲ್ಲಿ ಅವರು ಸುಂದರವಾದ ಒಂದು
ಯಜ್ಞವೇದಿಕೆಯನ್ನು ಕಟ್ಟಿದರು. 11ಇನ್ನೂ

ಶೀಲೋವಿನಲ್ಲಿದ್ದ ಇಸ್ರೇಲಿನ ಉಳಿದ ಜನರು, ಈ
ಮೂರು ಕುಲದವರು ಕಟ್ಟಿಸಿದ ಯಜ್ಞವೇದಿಕೆಯ ಬಗ್ಗೆ
ಕೇಳಿದರು. ಕಾನಾನಿನ ಗಡಿಯ ಬಳಿಯಿರುವ ಗೆಲಿ
ಲೋತ್ ಎಂಬಲ್ಲಿ ಇದನ್ನು ಕಟ್ಟಲಾಗಿದೆ ಎಂಬುದು
ಅವರಿಗೆ ತಿಳಿಯಿತು. ಇದು ಇಸ್ರೇಲರಿಗೆ ಸೇರಿದ
ಜೋರ್ಡನ್ ನದಿಯ ಸಮೀಪದಲ್ಲಿತ್ತು. [12]ಇಸ್ರೇಲರೆ
ಲ್ಲರು ಈ ಮೂರು ಕುಲಗಳ ಮೇಲೆ ತುಂಬ ಕೋಪ
ಗೊಂಡರು. ಅವರು ಒಟ್ಟಿಗೆ ಮೂರು ಕುಲಗಳ ವಿರುದ್ಧ
ಯುದ್ಧಮಾಡಲು ನಿರ್ಧರಿಸಿದರು.

[13-14]ಆದರೆ ಮೊದಲು ಇಸ್ರೇಲರು ರೂಬೇನ್ಯರ,
ಗಾದ್ಯರ, ಮನಸ್ಸೆ ಕುಲದವರ ಸಂಗಡ ಮಾತನಾಡಲು
ಕೆಲವು ಜನರನ್ನು ಕಳಿಸಿದರು. ಯಾಜಕ ಎಲ್ಲಾಜಾರನ
ಮಗನಾದ ಫೀನೆಹಾಸನ ನೇತೃತ್ವದಲ್ಲಿ ಪ್ರತಿಯೊಂದು
ಕುಲದಿಂದ ಒಬ್ಬೊಬ್ಬ ವ್ಯಕ್ತಿಯಂತೆ ಹತ್ತು ಜನರನ್ನು
ಕಳುಹಿಸಿದರು. ಈ ಹತ್ತು ಜನರು ತಮ್ಮ ಕುಲಗಳ ಮುಖ್ಯ
ನಾಯಕರಾಗಿದ್ದರು.

[15]ಈ ಹನ್ನೊಂದು ಮಂದಿ ಗಿಲ್ಯಾದಿಗೆ ಹೋಗಿ
ರೂಬೇನ್ಯರ, ಗಾದ್ಯರ ಮತ್ತು ಮನಸ್ಸೆಕುಲದವರ ಜೊತೆಗೆ
ಮಾತನಾಡಿ ಹೀಗೆಂದರು: [16]"ಇಸ್ರೇಲರೆಲ್ಲರೂ
ನಿಮ್ಮನ್ನು ಕೇಳುವುದೇನಂದರೆ, 'ಇಸ್ರೇಲಿನ ದೇವರ
ವಿರುದ್ಧವಾಗಿ ನೀವು ಹೀಗೆ ಮಾಡಿದ್ದೇಕೆ? ನೀವು
ಯೆಹೋವನ ವಿರುದ್ಧವಾಗಿ ತಿರುಗಿದ್ದೇಕೆ? ನಿಮಗಾಗಿ
ಯಜ್ಞವೇದಿಕೆಯನ್ನು ಕಟ್ಟಿಕೊಂಡದ್ದೇಕೆ? ಇದು ದೇವರ
ಉಪದೇಶಗಳಿಗೆ ವಿರುದ್ಧವಾಗಿದೆ ಎಂಬುದನ್ನು ನೀವು
ಬಲ್ಲಿರಿ. [17]ಪೆಗೋರ್‌ನಲ್ಲಿ ಏನಾಯಿತೆಂಬುದನ್ನು ಸ್ಮರಿಸಿ
ಕೊಳ್ಳಿ. ಆ ಪಾಪಕ್ಕಾಗಿ ನಾವು ಇನ್ನೂ ತೊಂದರೆಯನ್ನು
ಅನುಭವಿಸುತ್ತಿದ್ದೇವೆ. ದೇವರು ನಮ್ಮಲ್ಲಿ ಬಹಳಷ್ಟು
ಜನರನ್ನು ರೋಗಗ್ರಸ್ತರನ್ನಾಗಿ ಮಾಡಿದನು. ಆ ರೋಗ
ದಿಂದ ಇಂದಿಗೂ ನಾವು ಕಷ್ಟಪಡುತ್ತಿದ್ದೇವೆ.

[18]ಈಗ ನೀವು ಅದನ್ನೇ ಮಾಡುತ್ತಿದ್ದೀರಿ. ನೀವು
ಯೆಹೋವನಿಗೆ ವಿಮುಖರಾಗುತ್ತಿದ್ದೀರಿ. ನೀವು
ಮಾಡುತ್ತಿರುವುದನ್ನು ನಿಲ್ಲಿಸದಿದ್ದರೆ, ಪ್ರತಿಯೊಬ್ಬ
ಇಸ್ರೇಲಿನವನ ಮೇಲೆಯೂ ಯೆಹೋವನು
ಕೋಪಿಸಿಕೊಳ್ಳುವನು.

[19]"ನಿಮ್ಮ ಪ್ರದೇಶವು ದೇವಾರಾಧನೆ ಮಾಡಲು
ಅಶುದ್ಧವಾಗಿದ್ದರೆ ನಮ್ಮ ಪ್ರದೇಶಕ್ಕೆ ಬಂದುಬಿಡಿ.
ಯೆಹೋವನ ಗುಡಾರವು ನಮ್ಮ ಪ್ರದೇಶದಲ್ಲಿದೆ, ನೀವು
ನಮ್ಮ ಸ್ವಲ್ಪ ಭೂಮಿಯನ್ನು ತೆಗೆದುಕೊಂಡು ಅಲ್ಲಿ
ವಾಸವಾಗಿರಬಹುದು. ಆದರೆ ಯೆಹೋವನಿಗೆ ವಿರುದ್ಧ
ವಾಗಿ ಹೋಗಬೇಡಿ. ಬೇರೊಂದು ಯಜ್ಞವೇದಿಕೆಯನ್ನು
ಕಟ್ಟಬೇಡಿ. ದೇವದರ್ಶನಗುಡಾರದಲ್ಲಿ ನಾವು ಈಗಾ
ಗಲೇ ಯೆಹೋವನಾದ ನಮ್ಮ ದೇವರ ಯಜ್ಞ
ವೇದಿಕೆಯನ್ನು ಹೊಂದಿದ್ದೇವೆ.

[20]"ಜೆರಹನ ಮಗನಾದ ಆಕಾನನನ್ನು ನೆನಪು
ಮಾಡಿಕೊಳ್ಳಿ. ನಾಶಪಡಿಸಬೇಕಾಗಿದ್ದ ವಸ್ತುಗಳ ಬಗ್ಗೆ
ಆತನ ಆಜ್ಞೆಯನ್ನು ತಿರಸ್ಕರಿಸಿದನು. ಅವನು ದೇವರ
ನಿಯಮಗಳನ್ನು ಉಲ್ಲಂಘಿಸಿದನು; ಆದರೆ ಶಿಕ್ಷೆಯು
ಇಸ್ರೇಲಿನ ಎಲ್ಲ ಜನರಿಗಾಯಿತು. ಆಕಾನನು ತನ್ನ
ಪಾಪದಿಂದಾಗಿ ಸತ್ತನು. ಆದರೆ ಬಹಳಷ್ಟು ಬೇರೆ ಜನರೂ
ಸತ್ತರು" ಎಂದರು.

[21]ರೂಬೇನ್ಯರು, ಗಾದ್ಯರು ಮತ್ತು ಮನಸ್ಸೆಕುಲದವರು
ಆ ಹನ್ನೊಂದು ಜನರಿಗೆ ಹೀಗೆ ಉತ್ತರಿಸಿದರು: [22]"ನಮ್ಮ
ದೇವರು ಯೆಹೋವನೇ! ನಮ್ಮ ದೇವರು ಯೆಹೋವನೇ
ಎಂದು ಇನ್ನೊಮ್ಮೆ ನಾವು ಹೇಳುತ್ತೇವೆ. ನಾವು ಇದನ್ನು
ಏಕೆ ಮಾಡಿದೆವೆಂಬುದು ದೇವರಿಗೆ ತಿಳಿದಿದೆ. ನೀವೂ
ಅದನ್ನು ತಿಳಿದುಕೊಂಡಿರಬೇಕೆಂಬುದು ನಮ್ಮ ಆಶೆ ನಾವು
ಮಾಡಿದ್ದನ್ನು ನೀವು ವಿವೇಚಿಸಿ ನೋಡಬಹುದು.
ನಾವೇನಾದರೂ ತಪ್ಪುಮಾಡಿದ್ದೇವೆಂದು ಅನಿಸಿದ್ದಲ್ಲಿ ಆಗ
ನೀವು ನಮ್ಮನ್ನು ಕೊಲ್ಲಬಹುದು. [23]ನಾವು ದೇವರ
ಕಟ್ಟಳೆಗಳನ್ನು ಉಲ್ಲಂಘಿಸಿದ್ದರೆ ಯೆಹೋವನೇ ನಮ್ಮನ್ನು
ಶಿಕ್ಷಿಸಲಿ ಎಂದು ಆತನಲ್ಲಿ ಕೇಳಿಕೊಳ್ಳುತ್ತೇವೆ. [24]ನಾವು ಈ
ಯಜ್ಞವೇದಿಕೆಯನ್ನು ಸರ್ವಾಂಗಹೋಮ, ಸಮಾಧಾನ
ಯಜ್ಞ ,, ದಾನ್ಯ ಸಮರ್ಪಣೆ ಇವುಗಳನ್ನು ಸಮರ್ಪಿಸು
ವುದಕ್ಕೋಸ್ಕರ ಕಟ್ಟಿದ್ದೇವೆ ಎಂದು ನೀವು ತಿಳಿದಿರುವಿ
ರೇನು? ಇಲ್ಲ! ನಾವು ಆ ಕಾರಣಕ್ಕಾಗಿ ಇದನ್ನು ಕಟ್ಟಲಿಲ್ಲ.
ನಾವು ಈ ಯಜ್ಞವೇದಿಕೆಯನ್ನು ಕಟ್ಟಿರುವುದಕ್ಕೆ ಕಾರಣ
ವೇನೆಂದರೆ ಮುಂದಿನ ಕಾಲದಲ್ಲಿ ನಿಮ್ಮ ಜನರು ನಮ್ಮನ್ನು
ತಮ್ಮ ಜನಾಂಗದ ಒಂದು ,ಬಾಗವೆಂದು ಸ್ವೀಕರಿಸದೆ
ಇಸ್ರೇಲಿನ ದೇವರಾದ ಯೆಹೋವನನ್ನು ಆರಾಧಿಸಲು
ಅವಕಾಶ ಕೊಡದಿರಬಹುದು ಎಂಬ ಭಯ ನಮಗಿತ್ತು.
[25]ದೇವರು ನಮಗೆ ಜೋರ್ಡನ್ ನದಿಯ ಮತ್ತೊಂದು
ದಡದಲ್ಲಿ ಭೂಮಿಯನ್ನು ಕೊಟ್ಟಿದ್ದಾನೆ. ಅಂದರೆ
ಜೋರ್ಡನ್ ನದಿಯು ನಮ್ಮನ್ನು ಬೇರ್ಪಡಿಸುತ್ತದೆ.
ನಿಮ್ಮ ಮಕ್ಕಳು ದೊಡ್ಡವರಾಗಿ ನಿಮ್ಮ ಭೂಮಿಯನ್ನು
ಆಳುವಾಗ, ನಾವು ನಿಮ್ಮ ಜನರೆಂಬುದನ್ನು ಮರೆತು
ಬಿಡಬಹುದು. 'ರೂಬೇನ್ಯರು, ಗಾದ್ಯರು ಆದ ನೀವು
ಇಸ್ರೇಲಿನ ಅಂಗವಾಗಿಲ್ಲ' ಎಂದು ಹೇಳಿ ನಮ್ಮ ಮಕ್ಕಳು
ಯೆಹೋವನನ್ನು ಆರಾಧಿಸದಂತೆ ನಿಮ್ಮ ಮಕ್ಕಳು ತಡೆಯ
ಬಹುದು.

[26]"ಅದಕ್ಕಾಗಿ ಈ ಯಜ್ಞವೇದಿಕೆಯನ್ನು ಕಟ್ಟಲು ನಾವು
ನಿರ್ಧರಿಸಿದೆವು. ಆದರೆ ಅದನ್ನು ಸರ್ವಾಂಗಹೋಮ
ಗಳಿಗಾಗಲೀ ಯಜ್ಞಗಳಿಗಾಗಲೀ ಬಳಸಲು ಕಟ್ಟಿಲ್ಲ.
[27]ನೀವು ಆರಾಧಿಸುವ ದೇವರನ್ನೇ ನಾವೂ ಆರಾಧಿಸು
ತ್ತೇವೆಂಬುದನ್ನು ನಮ್ಮ ಜನರಿಗೆ ತೋರಿಸಿಕೊಡುವುದೇ
ಈ ಯಜ್ಞವೇದಿಕೆಯ ನಿಜವಾದ ಉದ್ದೇಶವಾಗಿದೆ. ನಾವು
ಯೆಹೋವನನ್ನು ಆರಾಧಿಸುತ್ತೇವೆ. ನಾವು ಸರ್ವಾಂಗ

ಹೋಮಗಳನ್ನು ಸಮಾಧಾನ ಯಜ್ಞಗಳನ್ನು
ಯೆಹೋವನ ಸಾನ್ನಿಧ್ಯದಲ್ಲಿ ಸಮರ್ಪಿಸುತ್ತೇವೆ ಎಂಬು
ದಕ್ಕೆ ಈ ಯಜ್ಞವೇದಿಕೆಯು ನಿಮಗೂ ನಮಗೂ ಮತ್ತು
ನಮ್ಮ ಮುಂದಿನ ಪೀಳಿಗೆಗಳಿಗೂ ಸಾಕ್ಷಿಯಾಗಿರುತ್ತದೆ.
ನಾವು ಸಹ ನಿಮ್ಮಂತೆಯೇ ಇಸ್ರೇಲಿನ ಜನರೆಂಬುದನ್ನು
ದೊಡ್ಡವರಾದ ಮೇಲೆ ನಿಮ್ಮ ಮಕ್ಕಳಿಗೆ ತಿಳಿದಿರಲಿ
ಎಂಬುದು ನಮ್ಮ ಇಚ್ಛೆ. [28]ಮುಂದಿನ ಕಾಲದಲ್ಲಿ ನಿಮ್ಮ
ಮಕ್ಕಳಿಗೆ 'ನೀವು ಇಸ್ರೇಲಿಗೆ ಸಂಬಂಧಪಟ್ಟವರಲ್ಲ'
ಎಂದು ಹೇಳಿದರೆ, ನಮ್ಮ ಮಕ್ಕಳು 'ಇಲ್ಲಿ ನೋಡಿ! ಗತಿಸಿ
ಹೋದ ನಮ್ಮ ಪೂರ್ವಿಕರು ಒಂದು ಯಜ್ಞವೇದಿಕೆ
ಯನ್ನು ಕಟ್ಟಿದ್ದಾರೆ. ಆ ಯಜ್ಞವೇದಿಕೆಯು ಪವಿತ್ರ
ಗುಡಾರದಲ್ಲಿರುವ ಯಜ್ಞವೇದಿಕೆಯಂತಿದೆ. ನಾವು ಈ
ಯಜ್ಞವೇದಿಕೆಯನ್ನು ಸರ್ವಾಂಗಹೋಮಗಳಿಗಾಗಲೀ
ಯಜ್ಞಗಳಿಗಾಗಲೀ ಬಳಸುವುದಿಲ್ಲ. ನಾವು ಇಸ್ರೇಲಿಗೆ
ಸೇರಿದವರೆಂಬುದಕ್ಕೆ ಈ ಯಜ್ಞವೇದಿಕೆ ಸಾಕ್ಷಿಯಾಗಿದೆ
ಎಂದು ಹೇಳುವರು.

[29]''ಯೆಹೋವನಿಗೆ ವಿರೋಧಿಗಳಾಗಲು ನಮಗೆ ನಿಜ
ವಾಗಿಯೂ ಇಷ್ಟವಿಲ್ಲ. ಆತನಿಗೆ ಅವಿಧೇಯರಾಗು
ವುದಕ್ಕೂ ಇಷ್ಟವಿಲ್ಲ. ನಿಜವಾದ ಯಜ್ಞವೇದಿಕೆಯು
ಪವಿತ್ರಗುಡಾರದ ಎದುರಿಗೆ ಮಾತ್ರ ಇದೆ. ಆ ಯಜ್ಞ
ವೇದಿಕೆಯು ನಮ್ಮ ದೇವರಾದ ಯೆಹೋವನದು ಎಂಬು
ದನ್ನು ನಾವು ಬಲ್ಲೆವು'' ಎಂಬುದಾಗಿ ಉತ್ತರಕೊಟ್ಟರು.

[30]ಯಾಜಕನಾದ ಫೀನೆಹಾಸನು ಮತ್ತು ಅವನ ಜೊತೆ
ಯಲ್ಲಿ ಬಂದ ಕುಲಾಧಿಪತಿಗಳು ರೂಬೇನ್ಯರ, ಗಾದ್ಯರ
ಮತ್ತು ಮನಸ್ಸೆ ಕುಲದವರ ಮಾತುಗಳನ್ನು ಕೇಳಿದರು.
ಇವರು ಹೇಳುತ್ತಿರುವುದು ಸತ್ಯ ಎಂದು ಅವರಿಗೆ
ಮನದಟ್ಟಾಯಿತು. [31]ಆಗ ಯಾಜಕನಾದ ಫೀನೆಹಾಸನು
ಈ ಕುಲಗಳವರಿಗೆ, ''ಯೆಹೋವನು ನಮ್ಮೊಂದಿಗಿದ್ದಾ
ನೆಂಬುದು ಮತ್ತು ನೀವು ಆತನಿಗೆ ವಿರೋಧಿಗಳಾಗಿಲ್ಲ
ವೆಂಬುದು ಈಗ ನಮಗೆ ತಿಳಿಯಿತು. ಯೆಹೋವನು
ಇಸ್ರೇಲರನ್ನು ಶಿಕ್ಷಿಸುವುದಿಲ್ಲವೆಂದು ನಮಗೆ ಸಂತೋಷ
ವಾಗಿದೆ'' ಎಂದು ಹೇಳಿದನು. [32]ಆಗ ಫೀನೆಹಾಸನು
ಮತ್ತು ನಾಯಕರು ಆ ಸ್ಥಳದಿಂದ ತಮ್ಮ ಮನೆಗಳಿಗೆ
ಹೋದರು. ಅವರು ರೂಬೇನ್ಯರನ್ನು ಮತ್ತು ಗಾದ್ಯರನ್ನು
ಗಿಲ್ಯಾದ್ ಪ್ರದೇಶದಲ್ಲಿ ಬಿಟ್ಟು ಕಾನಾನಿಗೆ ಹಿಂತಿರುಗಿ
ನಡೆದ ಸಂಗತಿಯನ್ನು ಇಸ್ರೇಲರಿಗೆ ತಿಳಿಸಿದರು. [33]ಆಗ
ಇಸ್ರೇಲರಿಗೆ ಸಮಾಧಾನವಾಯಿತು. ಅವರು ಸಂತೋಷ
ಪಟ್ಟು ದೇವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದರು. ಅವರು
ರೂಬೇನ್ಯರ, ಗಾದ್ಯರ ಮತ್ತು ಮನಸ್ಸೆ ಕುಲದವರೊಡನೆ
ಯುದ್ಧ ಮಾಡಬಾರದೆಂದೂ ಅವರು ವಾಸಮಾಡು
ತ್ತಿರುವ ಪ್ರದೇಶವನ್ನು ನಾಶ ಮಾಡಬಾರದೆಂದೂ
ನಿರ್ಧರಿಸಿದರು. [34]ರೂಬೇನ್ಯರು ಮತ್ತು ಗಾದ್ಯರು,
''ಯೆಹೋವನೇ ದೇವರು ಎಂಬುದಕ್ಕೆ ಈ ಯಜ್ಞ
ವೇದಿಕೆಯೇ ಸಾಕ್ಷಿ'' ಎಂದು ಅದಕ್ಕೆ 'ಏದ್' ಎಂದು
ಹೆಸರಿಟ್ಟರು.

### ಯೆಹೋಶುವನಿಂದ ಜನರಿಗೆ ಪ್ರೇರಣೆ

23 ಯೆಹೋವನು ಇಸ್ರೇಲರ ಶತ್ರುಗಳನ್ನು ಸದೆ
ಬಡೆದು ಅವರಿಗೆ ವಿಶ್ರಾಂತಿಯನ್ನು ಕೊಟ್ಟನು.
ಯೆಹೋವನು ಇಸ್ರೇಲನ್ನು ಸುರಕ್ಷಿತಗೊಳಿಸಿದನು.
ಅನೇಕ ವರ್ಷಗಳು ಕಳೆದವು. ಯೆಹೋಶುವನು ಬಹಳ
ಮುದುಕನಾದನು. [2]ಆಗ ಯೆಹೋಶುವನು ಎಲ್ಲಾ
ಹಿರಿಯನಾಯಕರನ್ನು , ಕುಟುಂಬದ ಮುಖ್ಯಸ್ಥರನ್ನು,
ನ್ಯಾಯಾಧೀಶರನ್ನು ಮತ್ತು ಇಸ್ರೇಲರ ಅಧಿಕಾರಿಗಳನ್ನು
ಸಭೆ ಸೇರಿಸಿದನು. ಯೆಹೋಶುವನು ಅವರಿಗೆ, ''ನಾನು
ಬಹಳ ಮುದುಕನಾಗಿದ್ದೇನೆ. [3]ಯೆಹೋವನು ನಮ್ಮ
ಶತ್ರುಗಳಿಗೆ ಏನು ಮಾಡಿದನೆಂಬುದು ನೀವು ನೋಡಿ
ದ್ದೀರಿ. ನಮಗೆ ಸಹಾಯ ಮಾಡುವುದಕ್ಕಾಗಿ ನಮ್ಮ ದೇವ
ರಾದ ಯೆಹೋವನು ನಮಗಾಗಿ ಯುದ್ಧಮಾಡಿದನು.
[4]ಪಶ್ಚಿಮದಲ್ಲಿ ಭೂಮಧ್ಯಸಾಗರವನ್ನು (ಮೆಡಿಟ
ರೇನಿಯನ್ ಸಾಗರ) ಮತ್ತು ಜೋರ್ಡನ್ ನದಿಯ
ಮಧ್ಯದ ಪ್ರದೇಶವನ್ನು ನೀವು ಸ್ವಾಧೀನಪಡಿಸಿಕೊಳ್ಳ
ಬಹುದೆಂದು ನಾನು ನಿಮಗೆ ತಿಳಿಸಿದ್ದನ್ನು ಸ್ಮರಿಸಿಕೊಳ್ಳಿ.
ನಾನು ಆ ಪ್ರದೇಶವನ್ನು ನಿಮಗೆ ಕೊಡುವುದಾಗಿ ವಾಗ್ದಾನ
ಮಾಡಿದ್ದೆ. ಆದರೆ ಇಲ್ಲಿಯವರೆಗೂ ಅದು ನಿಮ್ಮ
ಅಧೀನಕ್ಕೆ ಬಂದಿಲ್ಲ. [5]ಆದರೆ ನಿಮ್ಮ ದೇವರಾದ
ಯೆಹೋವನು ಅಲ್ಲಿಯ ನಿವಾಸಿಗಳನ್ನು ಬಲವಂತದಿಂದ
ಹೊರಡಿಸುತ್ತಾನೆ. ಆ ಪ್ರದೇಶವನ್ನು ನೀವು ಪಡೆದು
ಕೊಳ್ಳುತ್ತೀರಿ. ನಿಮ್ಮ ದೇವರಾದ ಯೆಹೋವನು
ನಿಮಗಾಗಿ ಇದನ್ನು ಮಾಡುವುದಾಗಿ ವಾಗ್ದಾನ
ಮಾಡಿದ್ದಾನೆ.

[6]''ಯೆಹೋವನ ಆಜ್ಞೆಗಳನ್ನೆಲ್ಲಾ ಜಾಗರೂಕತೆಯಿಂದ
ಕೈಕೊಂಡು ನಡೆಯಿರಿ. ಮೋಶೆಯ ಧರ್ಮಶಾಸ್ತ್ರದಲ್ಲಿ
ಬರೆದಿರುವ ಎಲ್ಲವನ್ನು ಪಾಲಿಸಿರಿ. ಆ ಧರ್ಮಶಾಸ್ತ್ರಕ್ಕೆ
ವಿಮುಖರಾಗಬೇಡಿ. [7]ಇಸ್ರೇಲರಲ್ಲದ ಕೆಲವು ಜನರು
ನಮ್ಮೊಂದಿಗೆ ವಾಸಮಾಡಿಕೊಂಡಿದ್ದಾರೆ. ಅವರು ತಮ್ಮ
ದೇವರುಗಳನ್ನೇ ಪೂಜಿಸುತ್ತಾರೆ. ಅವರೊಂದಿಗೆ ಸ್ನೇಹ
ಮಾಡಬೇಡಿ. ಅವರ ದೇವರುಗಳ ಸೇವೆಯನ್ನಾಗಲೀ
ಪೂಜೆಯನ್ನಾಗಲೀ ಮಾಡಬೇಡಿ. ಆ ದೇವರುಗಳ ಹೆಸರು
ಗಳ ಮೂಲಕ ಬೇಡಿಕೊಳ್ಳಬೇಡಿ.; ಅವುಗಳ ಮೇಲೆ
ಪ್ರಮಾಣ ಮಾಡಬೇಡಿ. [8]ನಿಮ್ಮ ದೇವರಾದ ಯೆಹೋವ
ನನ್ನೇ ಅನುಸರಿಸಿಕೊಂಡಿರಿ. ಈವರೆಗೆ ನೀವು ಹೇಗಿದ್ದಿರೊ
ಅದೇ ರೀತಿಯಲ್ಲಿ ಮುಂದೆಯೂ ಇರಿ.

[9]''ದೊಡ್ಡದಾದ ಮತ್ತು ಪ್ರಬಲವಾದ ಜನಾಂಗಗಳನ್ನು
ಸೋಲಿಸಲು ಯೆಹೋವನು ನಿಮಗೆ ನೆರವಾದನು.

ಆತನು ಅವರನ್ನು ತನ್ನ ಬಲವುಳ್ಳ ಹಸ್ತದಿಂದ ಹೊರಗಟ್ಟಿ
ದನು. ನಿಮ್ಮನ್ನು ಸೋಲಿಸಲು ಯಾವ ಜನಾಂಗಕ್ಕೂ
ಸಾಧ್ಯವಿಲ್ಲ. 10ಯೆಹೋವನ ಸಹಾಯದಿಂದ ನಿಮ್ಮಲ್ಲಿ
ಒಬ್ಬ ಇಸ್ರೇಲಿಯು ಒಂದು ಸಾವಿರ ಮಂದಿ ಶತ್ರುಗಳನ್ನು
ಸೋಲಿಸುವಂತಾಯಿತು; ಏಕೆಂದರೆ ನಿಮ್ಮ ದೇವರಾದ
ಯೆಹೋವನು ನಿಮಗಾಗಿ ಯುದ್ಧ ಮಾಡುವುದಾಗಿ
ಪ್ರಮಾಣ ಮಾಡಿದ್ದಾನೆ. 11ಆದ್ದರಿಂದ ನಿಮ್ಮ ದೇವರಾದ
ಯೆಹೋವನನ್ನು ಪ್ರೀತಿಸುವುದರಲ್ಲಿ ಬಹು ಎಚ್ಚರಿಕೆ
ಯಿಂದಿರಿ.

12‘‘ಯೆಹೋವನನ್ನೇ ಅನುಸರಿಸಿರಿ. ಇಸ್ರೇಲಿಗೆ ಸೇರಿ
ಲ್ಲದ ಅನ್ಯರೊಂದಿಗೆ ಸ್ನೇಹ ಮಾಡಬೇಡಿ. ಅವರ
ಜನರನ್ನು ಮದುವೆಯಾಗಬೇಡಿ. ನೀವು ಅವರೊಂದಿಗೆ
ಸ್ನೇಹ ಮಾಡಿದರೆ, 13ನಿಮ್ಮ ದೇವರಾದ ಯೆಹೋವನು
ಶತ್ರುಗಳನ್ನು ಸೋಲಿಸಲು ನಿಮಗೆ ಸಹಾಯ ಮಾಡುವು
ದಿಲ್ಲ, ಅವರು ನಿಮಗೆ ಉರುಲಿನಂತಾಗುತ್ತಾರೆ. ಹೊಗೆ
ಮತ್ತು ಧೂಳು ನಿಮ್ಮ ಕಣ್ಣಿಗೆ ನೋವನ್ನುಂಟು ಮಾಡು
ವಂತೆ ಅವರು ನಿಮಗೆ ನೋವನ್ನುಂಟು ಮಾಡುತ್ತಾರೆ; ಈ
ಒಳ್ಳೆಯ ದೇಶದಿಂದ ನಿಮ್ಮನ್ನು ಬಲಾತ್ಕಾರದಿಂದ ಹೊರ
ಗಟ್ಟಲಾಗುವುದು. ನಿಮ್ಮ ದೇವರಾದ ಯೆಹೋವನು ಈ
ದೇಶವನ್ನು ನಿಮಗೆ ಕೊಟ್ಟಿದ್ದಾನೆ. ಆದರೆ ಯೆಹೋವನ
ಆಜ್ಞೆಯನ್ನು ಪಾಲಿಸದಿದ್ದಲ್ಲಿ ನೀವು ಇದನ್ನು ಕಳೆದುಕೊಳ್ಳ
ಬೇಕಾಗುತ್ತದೆ.

14‘‘ನಾನು ಇಹಲೋಕ ಯಾತ್ರೆಯನ್ನು ಮುಗಿಸುವ
ಕಾಲ ಬಂದಂತಿದೆ. ಯೆಹೋವನು ನಿಮಗಾಗಿ ಅನೇಕ
ಮಹತ್ಕಾರ್ಯಗಳನ್ನು ಮಾಡಿದ್ದು ನಿಮಗೆ ಗೊತ್ತಿದೆ;
ಅದನ್ನು ನೀವು ಮನಃಪೂರ್ವಕವಾಗಿ ನಂಬುತ್ತೀರಿ.
ಆತನು ತನ್ನ ಯಾವ ವಾಗ್ದಾನವನ್ನೂ ನೆರವೇರಿಸದೆ
ಬಿಟ್ಟಿಲ್ಲ. ಯೆಹೋವನು ನಮಗೆ ಮಾಡಿದ ಪ್ರತಿಯೊಂದು
ವಾಗ್ದಾನಗಳನ್ನು ನೆರವೇರಿಸಿದ್ದಾನೆ. 15ನಿಮ್ಮ ದೇವರಾದ
ಯೆಹೋವನು ಮಾಡಿದ ಪ್ರತಿಯೊಂದು ಒಳ್ಳೆಯ
ವಾಗ್ದಾನವು ನೆರವೇರಿದೆ. ಅದೇ ರೀತಿಯಲ್ಲಿ
ಯೆಹೋವನು ತನ್ನ ಉಳಿದ ವಾಗ್ದಾನವನ್ನು ನೆರ
ವೇರಿಸುವನು. ನೀವು ತಪ್ಪುಗಳನ್ನು ಮಾಡಿದರೆ ನಿಮಗೆ
ಕೆಟ್ಟದ್ದಾಗುವುದೆಂದೂ ಆತನು ನಿಮಗೆ ಕೊಟ್ಟ ಈ ಒಳ್ಳೆಯ
ದೇಶದಿಂದ ಬಲವಂತವಾಗಿ ಹೊರಗಟ್ಟವುದಾಗಿಯೂ
ಆತನು ಹೇಳಿದ್ದಾನೆ.

16ನಿಮ್ಮ ದೇವರಾದ ಯೆಹೋವನೊಂದಿಗೆ ಮಾಡಿ
ಕೊಂಡ ಒಡಂಬಡಿಕೆಯನ್ನು ಪಾಲಿಸದೆ ಬೇರೆ ದೇವರು
ಗಳ ಸೇವೆ ಮಾಡಿದರೆ ಈ ದೇಶವನ್ನು ಕಳೆದುಕೊಳ್ಳುವಿರಿ.
ನೀವು ಅನ್ಯ ದೇವರುಗಳನ್ನು ಪೂಜಿಸಬಾರದು. ಇಲ್ಲ
ವಾದರೆ, ಯೆಹೋವನು ನಿಮ್ಮ ಮೇಲೆ ಬಹು ಕೋಪ
ಗೊಂಡು ಆತನು ನಿಮಗೆ ಕೊಟ್ಟ ಈ ಒಳ್ಳೆಯ ದೇಶದಿಂದ
ಬಲವಂತವಾಗಿ ಹೊರಡಿಸುವನು.’’

### ಯೆಹೋಶುವನು ವಂದನೆಗಳನ್ನು ಹೇಳಿದನು

24 ಯೆಹೋಶುವನು ಶೆಕೆಮಿನಲ್ಲಿ ಇಸ್ರೇಲಿನ ಎಲ್ಲ
ಕುಲದವರನ್ನು, ಹಿರಿಯ ನಾಯಕರನ್ನು ಕುಲದ
ಹಿರಿಯರನ್ನು , ನ್ಯಾಯಾಧೀಶರನ್ನು, ಅಧಿಕಾರಿಗಳನ್ನು,
ಮುಖಂಡರನ್ನು ಮತ್ತು ಇಸ್ರೇಲಿನ ನ್ಯಾಯಾಧಿಪತಿಗಳನ್ನು
ಒಟ್ಟಾಗಿ ಸೇರಿಸಿದನು. ಈ ಜನರು ದೇವರ ಸನ್ನಿಧಿಯಲ್ಲಿ
ನಿಂತರು.

2ಆಗ ಯೆಹೋಶುವನು ಅವರೆಲ್ಲರಿಗೆ, ‘‘ಇಸ್ರೇಲಿನ
ದೇವರಾದ ಯೆಹೋವನು ನಿಮಗೆ ಹೇಳುವುದನ್ನು ನಾನು
ನಿಮಗೆ ತಿಳಿಸುತ್ತಿದ್ದೇನೆ:

ಬಹಳ ಹಿಂದಿನ ಕಾಲದಲ್ಲಿ ನಿಮ್ಮ ಪೂರ್ವಿಕರು
ಯೂಫ್ರೇಟೀಸ್ ನದಿಯ ಆಚೆಯ ದಡದಲ್ಲಿದ್ದರು,
ನಾನು ಅಬ್ರಹಾಮ್ ಮತ್ತು ನಾಹೋರ್ ಎಂಬವರ
ತಂದೆಯಾದ ‘ತೆರಹ’ ಮೊದಲಾದ ಜನರ ಬಗ್ಗೆ
ಮಾತನಾಡುತ್ತಿದ್ದೇನೆ. ಆ ಸಮಯದಲ್ಲಿ ಅವರು ಬೇರೆ
ದೇವರುಗಳನ್ನು ಪೂಜಿಸುತ್ತಿದ್ದರು. 3ಆದರೆ ಯೆಹೋವ
ನಾದ ನಾನು ನಿಮ್ಮ ಪೂರ್ವಿಕನಾದ ಅಬ್ರಹಾಮನನ್ನು ಆ
ಪ್ರದೇಶದಿಂದ ನದಿಯ ಮತ್ತೊಂದು ದಡಕ್ಕೆ ಕರೆದು
ಕೊಂಡು ಬಂದೆ. ನಾನು ಅವನನ್ನು ಕಾನಾನ್ ಪ್ರದೇಶ
ದಲ್ಲೆಲ್ಲ ಸಂಚಾರ ಮಾಡಿಸಿ ಅವನಿಗೆ ಅನೇಕ ಮಕ್ಕಳನ್ನು
ಕೊಟ್ಟೆನು, ನಾನು ಅಬ್ರಹಾಮನಿಗೆ ಇಸಾಕನೆಂಬ
ಮಗನನ್ನು ಕೊಟ್ಟೆ. 4ಇಸಾಕನಿಗೆ ಯಾಕೋಬ ಮತ್ತು
ಏಸಾವ ಎಂಬ ಗಂಡುಮಕ್ಕಳನ್ನು ಕೊಟ್ಟೆನು. ಏಸಾವನಿಗೆ
ಸೇಯೀರ್ ಪರ್ವತಗಳ ಸುತ್ತಮುತ್ತಲಿನ ಪ್ರದೇಶವನ್ನು
ಕೊಟ್ಟೆನು. ಯಾಕೋಬ ಮತ್ತು ಅವನ ಮಕ್ಕಳು ಅಲ್ಲಿ
ಇರಲಿಲ್ಲ. ಅವರು ಈಜಿಪ್ಟ್ ದೇಶದಲ್ಲಿ ವಾಸಮಾಡಲು
ಹೋಗಿದ್ದರು. 5ತರುವಾಯ ನಾನು ಮೋಶೆ ಆರೋನ
ರನ್ನು ಈಜಿಪ್ಟಿಗೆ ಕಳುಹಿಸಿದೆ. ಅವರು ನನ್ನ ಜನರನ್ನು
ಈಜಿಪ್ಟಿನಿಂದ ಹೊರತರಬೇಕೆಂಬುದು ನನ್ನ ಇಚ್ಛೆ
ಯಾಗಿತ್ತು. ಈಜಿಪ್ಟಿನಲ್ಲಿ ಅನೇಕ ಅದ್ಭುತವಾದ ಕಾರ್ಯ
ಗಳನ್ನು ನಡೆಸಿ ನಾನು ನಿಮ್ಮ ಜನರನ್ನು ಈಜಿಪ್ಟಿನಿಂದ
ಹೊರಗೆ ತಂದೆ. 6ಹೀಗೆ ನಿಮ್ಮ ಪೂರ್ವಿಕರು ಈಜಿಪ್ಟಿನಿಂದ
ಹೊರಟು ಕೆಂಪು ಸಮುದ್ರಕ್ಕೆ ಬಂದರು. ಈಜಿಪ್ಟಿನ ಜನರು
ರಥಗಳಲ್ಲಿ ಮತ್ತು ಕುದುರೆಗಳ ಮೇಲೆ ಅವರನ್ನು
ಬೆನ್ನಟ್ಟಿಕೊಂಡು ಬಂದರು. 7ಆಗ ನಿಮ್ಮ ಜನರು
ಯೆಹೋವನಾದ ನನ್ನ ಸಹಾಯ ಕೋರಿದರು. ನಾನು
ಈಜಿಪ್ಟಿನ ಜನರಿಗೂ ಅವರಿಗೂ ಮಧ್ಯದಲ್ಲಿ ಕತ್ತಲೆ
ಯಾಗುವಂತೆ ಮಾಡಿದೆ; ಸಮುದ್ರವು ಅವರನ್ನು ಮುಚ್ಚಿ
ಬಿಡುವಂತೆ ಮಾಡಿದೆ. ಈಜಿಪ್ಟಿನ ಸೈನ್ಯಕ್ಕೆ ನಾನು
ಮಾಡಿದ್ದನ್ನು ನೀವೇ ನೋಡಿ ದ್ದೀರಿ.

‘‘ತರುವಾಯ ಬಹಳ ಕಾಲದವರೆಗೆ ನೀವು ಅರಣ್ಯದಲ್ಲಿ
ಪ್ರವಾಸಮಾಡಿಕೊಂಡಿದ್ದಿರಿ. 8ಆಗ ನಾನು ನಿಮ್ಮನ್ನು
ಜೋರ್ಡನ್ ನದಿಯ ಪೂರ್ವದಲ್ಲಿರುವ ಅಮೋರಿ

ಯರ ಪ್ರದೇಶಕ್ಕೆ ಕರೆತಂದೆನು. ಆ ಜನರು ನಿಮ್ಮೊಂದಿಗೆ
ಯುದ್ಧ ಮಾಡಿದರು. ಆದರೆ ನೀವು ಅವರನ್ನು ಸೋಲಿಸು
ವಂತೆ ನಾನು ಮಾಡಿದೆ. ಆ ಜನರನ್ನು ನಾಶಮಾಡುವ
ಶಕ್ತಿಯನ್ನು ನಾನು ನಿಮಗೆ ಕೊಟ್ಟೆನು. ಆಗ ನೀವು ಆ
ಪ್ರದೇಶವನ್ನು ಸ್ವಾಧೀನಪಡಿಸಿಕೊಂಡಿರಿ.
9''ಅನಂತರ ಮೋವಾಬ್ಯರ ಅರಸನೂ ಚಿಪ್ಪೋರನ
ಮಗನೂ ಆದ ಬಾಲಾಕನು ಇಸ್ರೇಲರೊಂದಿಗೆ ಯುದ್ಧ
ಮಾಡಲು ಸಿದ್ಧತೆ ಮಾಡಿದನು. ಅವನು ಬೆಯೋರನ
ಮಗನಾದ ಬಿಳಾಮನನ್ನು ಕರೆಯಿಸಿ ನಿಮ್ಮನ್ನು ಶಪಿಸಲು
ಹೇಳಿದನು. 10ಆದರೆ ಯೆಹೋವನಾದ ನಾನು ಬಿಳಾಮ
ನಿಗೆ ಶಪಿಸಲು ಅನುಮತಿ ಕೊಡಲಿಲ್ಲ. ಅದಕ್ಕಾಗಿ
ಬಿಳಾಮನು ನಿಮಗೆ ಶುಭವನ್ನೇ ಕೋರಿದನು. ಅವನು
ಅನೇಕ ಸಲ ನಿಮ್ಮನ್ನು ಆಶೀರ್ವದಿಸಿದನು. ನಾನು
ನಿಮ್ಮನ್ನು ಅವನ ಕೈಗಳಿಂದ ಬಿಡುಗಡೆ ಮಾಡಿದೆ.
11''ತರುವಾಯ ನೀವು ಜೋರ್ಡನ್ ನದಿಯನ್ನು
ದಾಟಿ ಜೆರಿಕೋ ನಗರಕ್ಕೆ ಹೋದಿರಿ. ಜೆರಿಕೋ ನಗರದ
ಜನರು ನಿಮ್ಮ ಮೇಲೆ ಯುದ್ಧ ಮಾಡಿದರು. ಅಮೋರಿ
ಯರು, ಪೆರಿಜ್ಜೀಯರು, ಕಾನಾನ್ಯರು, ಹಿತ್ತಿಯರು,
ಗಿರ್ಗಾಷಿಯರು. ಹಿವ್ವಿಯರು, ಯೆಬೂಸಿಯರು ಕೂಡ
ನಿಮ್ಮ ಮೇಲೆ ಯುದ್ಧಕ್ಕೆ ಬಂದರು. ಆದರೆ ನೀವು
ಅವರೆಲ್ಲರನ್ನು ಸೋಲಿಸುವಂತೆ ನಾನು ಮಾಡಿದೆನು.
12ನಿಮ್ಮ ಸೈನಿಕರು ಯುದ್ಧಮಾಡಲು ಹೋಗುತ್ತಿರುವಾಗ
ನಾನು ಅವರಿಗಿಂತ ಮುಂಚೆಯೇ ಕಡಜದ ಹುಳುಗಳ
ಗುಂಪನ್ನು ಕಳಿಸಿದ್ದೆ. ಈ ಹುಳುಗಳು ಅಮೋರಿಯರ
ಅರಸರನ್ನು ಓಡಿಸಿಬಿಟ್ಟವು. ಹೀಗೆ ನೀವು ಖಡ್ಗಗಳನ್ನು
ಮತ್ತು ಬಿಲ್ಲುಬಾಣಗಳನ್ನು ಉಪಯೋಗಿಸದೆಯೇ ಆ
ಪ್ರದೇಶವನ್ನು ವಶಪಡಿಸಿಕೊಂಡಿರಿ. 13ಯೆಹೋವನಾದ
ನಾನು ನಿಮಗೆ ಆ ದೇಶವನ್ನು ಕೊಟ್ಟಿದ್ದೇನೆ. ನೀವು ಆ
ದೇಶಕ್ಕಾಗಿ ಏನನ್ನೂ ಮಾಡಿಲ್ಲ . ನಿಮಗೆ ಅದನ್ನು
ಕೊಟ್ಟವನು ನಾನೇ. ನೀವು ಆ ನಗರಗಳನ್ನು ಕಟ್ಟಲೇ
ಇಲ್ಲ. ಅವುಗಳನ್ನು ನಿಮಗೆ ಕೊಟ್ಟವನು ನಾನೇ. ಈಗ
ನೀವು ಆ ಪ್ರದೇಶದಲ್ಲಿ ಮತ್ತು ಆ ನಗರಗಳಲ್ಲಿ ವಾಸ
ಮಾಡುತ್ತಿದ್ದೀರಿ. ನೀವು ದ್ರಾಕ್ಷಿ ಮತ್ತು ಆಲಿವ್ ಮರದ
ತೋಟಗಳನ್ನು ಹೊಂದಿರುವಿರಿ. ಆದರೆ ಆ ತೋಟ
ಗಳನ್ನು ನೀವು ಬೆಳೆಸಲಿಲ್ಲ.''
14ತರುವಾಯ ಯೆಹೋಶುವನು ಜನರಿಗೆ, ''ಈಗ
ನೀವು ಯೆಹೋವನ ಮಾತುಗಳನ್ನು ಕೇಳಿದ್ದೀರಿ. ನೀವು
ಆತನಲ್ಲಿ ಭಯಭಕ್ತಿಯಿಂದಿರಬೇಕು. ನಿಮ್ಮ ಪೂರ್ವಿಕರು
ಯೂಫ್ರೇಟೀಸ್ ನದಿಯ ಆಚೆಯಲ್ಲಿಯೂ ಈಜಿಪ್ಟಿ
ನಲ್ಲಿಯೂ ಪೂಜಿಸುತ್ತಿದ್ದ ಸುಳ್ಳುದೇವತೆಗಳನ್ನು ಎಸೆದು
ಬಿಡಿ. ಈಗ ನೀವು ಯೆಹೋವನ ಸೇವೆಯನ್ನು ಮಾತ್ರ
ಮಾಡಬೇಕು.
15''ನೀವು ಯೆಹೋವನ ಸೇವೆಮಾಡಲು ಇಷ್ಟಪಡ
ದಿದ್ದರೆ ಯಾರ ಸೇವೆಯನ್ನು ಮಾಡಬೇಕೆಂದಿದ್ದೀರಿ? ಈ
ಹೊತ್ತೇ ಆರಿಸಿಕೊಳ್ಳಿರಿ. ನಿಮ್ಮ ಪೂರ್ವಿಕರು
ಯೂಫ್ರೇಟೀಸ್ ನದಿಯ ಆಚೆ ಇದ್ದಾಗ ಪೂಜಿಸುತ್ತಿದ್ದ
ದೇವರುಗಳ ಸೇವೆ ಮಾಡುವಿರೋ ಅಥವಾ ಈ ಪ್ರದೇಶ
ದಲ್ಲಿದ್ದ ಅಮೋರಿಯರ ದೇವತೆಗಳ ಸೇವೆಮಾಡುವಿರೋ
ಎಂಬುದನ್ನು ನೀವು ಇಂದು ನಿರ್ಧರಿಸಬೇಕು. ಆಯ್ಕೆ
ನಿಮಗೆ ಬಿಟ್ಟದ್ದು. ಆದರೆ ನಾನು ಮತ್ತು ನನ್ನ ಕುಟುಂಬ
ದವರು ಯೆಹೋವನನ್ನೇ ಸೇವಿಸುತ್ತೇವೆ'' ಅಂದನು.
16ಅದಕ್ಕೆ ಜನರು,''ನಾವು ಯೆಹೋವನನ್ನು ಅನು
ಸರಿಸುವುದನ್ನು ಎಂದಿಗೂ ನಿಲ್ಲಿಸುವದಿಲ್ಲ. ನಾವು ಬೇರೆ
ದೇವರುಗಳ ಸೇವೆಯನ್ನು ಎಂದಿಗೂ ಮಾಡುವುದಿಲ್ಲ.
17ನಮ್ಮ ಜನರನ್ನು ಈಜಿಪ್ಟಿನಿಂದ ಹೊರತಂದವನು ನಮ್ಮ
ದೇವರಾದ ಯೆಹೋವನೆಂದು ನಮಗೆ ಗೊತ್ತು. ನಾವು
ಈಜಿಪ್ಟಿನಲ್ಲಿ ಗುಲಾಮರಾಗಿದ್ದೆವು; ಆದರೆ ಯೆಹೋವನು
ಅಲ್ಲಿ ನಮಗೋಸ್ಕರ ಮಹತ್ಕಾರ್ಯಗಳನ್ನು ಮಾಡಿ
ನಮ್ಮನ್ನು ಅಲ್ಲಿಂದ ಬಿಡಿಸಿಕೊಂಡು ಬಂದನು. ನಾವು
ಬೇರೆ ದೇಶಗಳಲ್ಲಿ ಪ್ರವಾಸ ಮಾಡಿಕೊಂಡು ಬರುವಾಗ
ನಮ್ಮನ್ನು ರಕ್ಷಿಸಿದನು. 18ಆ ದೇಶಗಳ ಜನರನ್ನು
ಸೋಲಿಸಲು ಯೆಹೋವನು ನಮಗೆ ಸಹಾಯ ಮಾಡಿ
ದನು. ಈಗ ನಾವಿರುವ ಸ್ಥಳದಲ್ಲಿ ಮುಂಚೆ ವಾಸಮಾಡಿ
ಕೊಂಡಿದ್ದ ಅಮೋರಿಯರನ್ನು ಸೋಲಿಸಲು
ಯೆಹೋವನು ನಮಗೆ ಸಹಾಯ ಮಾಡಿದ್ದಾನೆ. ಅದಕ್ಕಾಗಿ
ನಾವು ಯೆಹೋವನ ಸೇವೆಯನ್ನು ಮುಂದುವರಿಸುತ್ತೇವೆ;
ಏಕೆಂದರೆ ಆತನು ನಮ್ಮ ದೇವರು'' ಅಂದರು.
19ಆಗ ಯೆಹೋಶುವನು ಅವರಿಗೆ,''ಅದು ನಿಜವಲ್ಲ,
ನೀವು ಯೆಹೋವನ ಸೇವೆಯನ್ನು ಮುಂದುವರೆಸಿ
ಕೊಂಡು ಹೋಗಲಾರಿರಿ. ನಮ್ಮ ದೇವರಾದ
ಯೆಹೋವನು ಪವಿತ್ರನಾಗಿದ್ದಾನೆ; ತನ್ನ ಜನರು ಅನ್ಯ
ದೇವರುಗಳನ್ನು ಪೂಜಿಸುವುದನ್ನು ಆತನು ದ್ವೇಷಿಸು
ತ್ತಾನೆ. ಒಂದುವೇಳೆ ನೀವೇನಾದರೂ ಆತನ ವಿರುದ್ಧವಾಗಿ
ತಿರುಗಿಕೊಂಡರೆ ಆತನು ನಿಮ್ಮನ್ನು ಕ್ಷಮಿಸುವುದಿಲ್ಲ.
20ನೀವು ಯೆಹೋವನನ್ನು ಬಿಟ್ಟು ಅನ್ಯದೇವರುಗಳ ಸೇವೆ
ಮಾಡಿದರೆ ಆತನು ನಿಮಗೆ ಕೇಡನ್ನು ಬರಮಾಡುವನು.
ಯೆಹೋವನು ನಿಮ್ಮನ್ನು ನಾಶಮಾಡುತ್ತಾನೆ. ನಿಮ್ಮ
ದೇವರಾದ ಯೆಹೋವನು ನಿಮಗೆ ಒಳ್ಳೆಯವ
ನಾಗಿದ್ದಾನೆ. ಆದರೆ ನೀವು ಆತನಿಗೆ ವಿಮುಖರಾದರೆ
ಆತನು ನಿಮ್ಮನ್ನು ನಾಶಮಾಡುತ್ತಾನೆ'' ಅಂದನು.
21ಆದರೆ ಜನರು, ''ಇಲ್ಲ! ನಾವು ಯೆಹೋವನ ಸೇವೆ
ಮಾಡುತ್ತೇವೆ'' ಎಂದು ಹೇಳಿದರು.
22ಅದಕ್ಕೆ ಯೆಹೋಶುವನು, ''ನೀವು ನಿಮ್ಮನ್ನೂ ನಿಮ್ಮ
ಸುತ್ತಲಿರುವ ಜನರನ್ನೂ ನೋಡಿರಿ. ನೀವು ಯೆಹೋವನ
ಸೇವೆಯನ್ನೇ ಆರಿಸಿಕೊಂಡಿದ್ದೀರಿ ಎಂಬುದು ನಿಮ್ಮೆಲ್ಲರಿಗೆ

ಗೊತ್ತು ಮತ್ತು ಅದಕ್ಕೆ ನೀವು ಒಪ್ಪಿದ್ದೀರಿ. ನೀವೆಲ್ಲರೂ
ಇದಕ್ಕೆ ಸಾಕ್ಷಿಯಾಗಿರುವಿರಾ?'' ಎಂದು ಕೇಳಿದನು.
ಜನರು, ‘‘ಹೌದು, ಇದು ನಿಜ! ನಾವೆಲ್ಲರು
ಯೆಹೋವನ ಸೇವೆಯನ್ನೇ ಆರಿಸಿಕೊಂಡಿದ್ದೇವೆ'' ಎಂದು
ಉತ್ತರಿಸಿದರು.
23 ಆಗ ಯೆಹೋಶುವನು, ‘‘ಹಾಗಾದರೆ ನಿಮ್ಮಲ್ಲಿರುವ
ಸುಳ್ಳು ದೇವತೆಗಳನ್ನು ಎಸೆದುಬಿಡಿ. ಇಸ್ರೇಲರ ದೇವರಾದ
ಯೆಹೋವನ ಕಡೆಗೆ ನಿಮ್ಮ ಹೃದಯಗಳನ್ನು ತಿರುಗಿಸಿ
ಕೊಳ್ಳಿರಿ'' ಎಂದು ಹೇಳಿದನು.
24 ಆಗ ಜನರು ಯೆಹೋಶುವನಿಗೆ, ‘‘ನಾವು ನಮ್ಮ
ದೇವರಾದ ಯೆಹೋವನ ಸೇವೆಯನ್ನೇ ಮಾಡುವೆವು.
ನಾವು ಆತನ ಆಜ್ಞೆಯನ್ನು ಪಾಲಿಸುವೆವು'' ಎಂದರು.
25 ಆದುದರಿಂದ ಯೆಹೋಶುವನು ಶೆಕೆಮಿನಲ್ಲಿ ಜನರಿ
ಗಾಗಿ ಒಂದು ಒಡಂಬಡಿಕೆಯನ್ನು ಮಾಡಿದನು. ಅದು
ಅವರಿಗೆ ಪಾಲಿಸಬೇಕಾದ ಒಂದು ವಿಧಿಯಾಯಿತು.
26 ಯೆಹೋಶುವನು ಇವುಗಳನ್ನು ದೇವರ ಧರ್ಮಶಾಸ್ತ್ರ
ಗ್ರಂಥದಲ್ಲಿ ಬರೆದನು. ಯೆಹೋಶುವನು ಅಲ್ಲಿದ್ದ ಒಂದು
ದೊಡ್ಡ ಕಲ್ಲನ್ನು ತೆಗೆದುಕೊಂಡು ಈ ಒಡಂಬಡಿಕೆಗೆ ಸಾಕ್ಷಿ
ಯಾಗಿ ಅದನ್ನು ಯೆಹೋವನ ಪವಿತ್ರವಾದ ಗುಡಾರದ
ಹತ್ತಿರವಿದ್ದ ಓಕ್ ಮರದ ಕೆಳಗೆ ನಿಲ್ಲಿಸಿದನು.
27 ಆಗ ಯೆಹೋಶುವನು ಜನರೆಲ್ಲರಿಗೆ, ‘‘ನಾವು
ಇಂದು ಹೇಳಿದ ಎಲ್ಲವನ್ನು ಜ್ಞಾಪಕದಲ್ಲಿಟ್ಟುಕೊಳ್ಳಲು
ಈ ಕಲ್ಲು ನಿಮಗೆ ಸಾಕ್ಷಿಯಾಗಿರುವುದು. ಇಂದು
ಯೆಹೋವನು ನಮ್ಮೊಡನೆ ಮಾತನಾಡುತ್ತಿದ್ದಾಗ ಈ
ಕಲ್ಲು ಇಲ್ಲಿಯೇ ಇತ್ತು. ಅದಕ್ಕಾಗಿ ಈ ಕಲ್ಲು ಇಂದು ನಡೆದ
ಸಂಗತಿಯನ್ನು ನೆನಪಿನಲ್ಲಿಡಲು ನಮಗೆ ಸಹಾಯಕ
ವಾಗುವುದು. ನೀವು ನಿಮ್ಮ ದೇವರಾದ ಯೆಹೋವನಿಗೆ
ವಿಮುಖರಾದರೆ ಈ ಕಲ್ಲೇ ನಿಮಗೆ ವಿರೋಧವಾಗಿ ಸಾಕ್ಷಿ
ಹೇಳುವುದು'' ಎಂದು ಹೇಳಿದನು. 28 ಬಳಿಕ ಯೆಹೋಶು
ವನು ಜನರಿಗೆ ತಮ್ಮ ಮನೆಗಳಿಗೆ ಹೋಗುವಂತೆ ತಿಳಿಸಿ
ದನು. ಆದ್ದರಿಂದ ಪ್ರತಿಯೊಬ್ಬರೂ ತಮ್ಮತಮ್ಮ ಸ್ವನಾಡಿಗೆ
ಹೊರಟು ಹೋದರು.

## ಯೆಹೋಶುವನ ಮರಣ

29 ಇದಾದ ಮೇಲೆ ನೂನನ ಮಗನಾದ ಯೆಹೋಶು
ವನು ಮರಣ ಹೊಂದಿದನು. ಯೆಹೋಶುವನು ನೂರ
ಹತ್ತು ವರ್ಷ ಬದುಕಿದನು.
30 ಯೆಹೋಶುವನನ್ನು ತಿಮ್ನತ್ ಸೆರಹದ ಅವನ
ಸ್ವಂತ ಭೂಮಿಯಲ್ಲಿ ಸಮಾಧಿ ಮಾಡಿದರು. ಇದು
ಎಫ್ರಾಯೀಮ್ ಪರ್ವತ ಪ್ರದೇಶದಲ್ಲಿರುವ ಗಾಷ್
ಬೆಟ್ಟದ ಉತ್ತರದಿಕ್ಕಿನಲ್ಲಿದೆ.
31 ಯೆಹೋಶುವನು ಜೀವಿಸಿದಾಗ ಇಸ್ರೇಲರು
ಯೆಹೋವನ ಸೇವೆಮಾಡಿದರು; ಯೆಹೋಶುವನ
ಮರಣಾನಂತರವೂ ಅವರು ಯೆಹೋವನ ಸೇವೆಯನ್ನು
ಮುಂದುವರೆಸಿದರು. ಯೆಹೋವನು ಇಸ್ರೇಲರಿಗಾಗಿ
ಮಾಡಿದ ಮಹತ್ಕಾರ್ಯಗಳನ್ನು ನೋಡಿದ್ದ ಅವರ
ನಾಯಕರು ಜೀವಿಸಿದ್ದಾಗಲೂ ಇಸ್ರೇಲರು ಯೆಹೋವನ
ಸೇವೆ ಮಾಡಿದರು.

## ಯೋಸೇಫನ ಎಲುಬುಗಳನ್ನು ಸ್ವದೇಶದಲ್ಲಿ ಹೂಳಿಟ್ಟದ್ದು

32 ಇಸ್ರೇಲರು ಈಜಿಪ್ಟಿನಿಂದ ಹೊರಟಾಗ ತಮ್ಮೊಂದಿಗೆ
ಯೋಸೇಫನ ಎಲುಬುಗಳನ್ನೂ ತೆಗೆದುಕೊಂಡು ಬಂದಿ
ದ್ದರು. ಅವರು ಯೋಸೇಫನ ಎಲುಬುಗಳನ್ನು ಶೆಕೆಮಿ
ನಲ್ಲಿ ಹೂಳಿದರು. ಯಾಕೋಬನು ಶೆಕೆಮನ ತಂದೆ
ಯಾದ ಹಮೋರನ ಗಂಡುಮಕ್ಕಳಿಂದ ನೂರು ಬೆಳ್ಳಿ
ನಾಣ್ಯಗಳನ್ನು ಕೊಟ್ಟು ಕೊಂಡುಕೊಂಡ ಶೆಕೆಮ್ ಊರಿನ
ಹೊಲದಲ್ಲಿ ಆ ಎಲುಬುಗಳನ್ನು ಹೂಳಿದರು. ಈ
ಭೂಮಿಯು ಯೋಸೇಫನ ಮಕ್ಕಳದಾಗಿತ್ತು.
33 ಆರೋನನ ಮಗನಾದ ಎಲ್ಲಾಜಾರನು ಮರಣ
ಹೊಂದಿದನು. ಗಿಬೇತ್‌ನಲ್ಲಿ ಎಲ್ಲಾಜಾರನನ್ನು ಸಮಾಧಿ
ಮಾಡಲಾಯಿತು. ಗಿಬೇತ್ ಊರು ಎಫ್ರಾಯೀಮ್
ಪರ್ವತ ಪ್ರಾಂತ್ಯದಲ್ಲಿತ್ತು. ಆ ಊರನ್ನು ಎಲ್ಲಾಜಾರನ
ಮಗನಾದ ಫೀನೆಹಾಸನಿಗೆ ಕೊಡಲಾಗಿತ್ತು.

# ನ್ಯಾಯಸ್ಥಾಪಕರು

### ಕಾನಾನ್ಯರೊಂದಿಗೆ ಯೆಹೂದ್ಯರ ಯುದ್ಧ

1 ಯೆಹೋಶುವನು ಮರಣ ಹೊಂದಿದ ನಂತರ
ಇಸ್ರೇಲರು ಯೆಹೋವನಿಗೆ, ‘‘ನಮ್ಮಲ್ಲಿ ಯಾವ ಕುಲ
ದವರು ಮೊದಲು ಹೋಗಿ ಕಾನಾನ್ಯರ ವಿರುದ್ಧ ಯುದ್ಧ
ಮಾಡಬೇಕು?’’ ಎಂದು ಕೇಳಿದರು.
2ಯೆಹೋವನು ಇಸ್ರೇಲರಿಗೆ, ‘‘ಯೆಹೂದ ಕುಲ
ದವರು ಹೋಗಲಿ. ಅವರು ಈ ದೇಶವನ್ನು ವಶಪಡಿಸಿ
ಕೊಳ್ಳುವಂತೆ ನಾನು ಮಾಡುತ್ತೇನೆ’’ ಎಂದು ಹೇಳಿದನು.
3ಯೆಹೂದ್ಯರು ತಮ್ಮ ಸಹೋದರರಾದ ಸಿಮೆಯೋನ್ಯ
ರಿಂದ ಸಹಾಯವನ್ನು ಕೇಳಿದರು; ಯೆಹೂದ್ಯರು
‘‘ಸಹೋದರರೇ, ಯೆಹೋವನು ನಮ್ಮಲ್ಲಿ ಪ್ರತಿಯೊಬ್ಬ
ರಿಗೂ ಸ್ವಲ್ಪಸ್ವಲ್ಪ ಭೂಮಿಯನ್ನು ಕೊಡುವುದಾಗಿ
ವಾಗ್ದಾನ ಮಾಡಿದ್ದಾನೆ. ನೀವು ಬಂದು ನಮ್ಮ ಭೂಮಿ
ಗಾಗಿ ಹೋರಾಡುವ ಯುದ್ಧದಲ್ಲಿ ಸಹಾಯ ಮಾಡಿದರೆ,
ನಿಮ್ಮ ಭೂಮಿಗಾಗಿ ಹೋರಾಡುವ ಯುದ್ಧದಲ್ಲಿ ನಾವು
ನಿಮಗೆ ಸಹಾಯ ಮಾಡುತ್ತೇವೆ’’ ಎಂದು ಹೇಳಿದರು.
ಸಿಮೆಯೋನ್ಯರು ತಮ್ಮ ಸಹೋದರರಾದ ಯೆಹೂದ್ಯರಿಗೆ
ಯುದ್ಧದಲ್ಲಿ ಸಹಾಯ ಮಾಡಲು ಒಪ್ಪಿಕೊಂಡರು.
4ಯೆಹೋವನು ಕಾನಾನ್ಯರನ್ನೂ ಪೆರಿಜ್ಜೀಯರನ್ನೂ
ಸೋಲಿಸುವುದರಲ್ಲಿ ಯೆಹೂದ್ಯರಿಗೆ ಸಹಾಯ ಮಾಡಿ
ದನು. ಯೆಹೂದ್ಯರು ಬೆಜೆಕ್ ನಗರದಲ್ಲಿ ಹತ್ತು ಸಾವಿರ
ಜನರನ್ನು ಕೊಂದುಹಾಕಿದರು. 5ಯೆಹೂದ್ಯರು ಬೆಜೆಕ್
ನಗರದ ಅರಸನನ್ನು ಕಂಡುಹಿಡಿದು ಅವನೊಂದಿಗೆ
ಯುದ್ಧಮಾಡಿ ಸೋಲಿಸಿದರು. ಯೆಹೂದ್ಯರು ಕಾನಾನ್ಯ
ರನ್ನೂ ಪೆರಿಜ್ಜೀಯರನ್ನೂ ಸೋಲಿಸಿದರು.
6ಬೆಜೆಕ್‌ನ ಅರಸನು* ತಪ್ಪಿಸಿಕೊಳ್ಳಲು ಪ್ರಯತ್ನ
ಮಾಡಿದನು. ಆದರೆ ಯೆಹೂದ್ಯರು ಅವನನ್ನು ಬೆನ್ನಟ್ಟಿ
ಹಿಡಿದು ಅವನ ಕೈಕಾಲುಗಳ ಹೆಬ್ಬೆರಳುಗಳನ್ನು ಕತ್ತರಿಸಿ
ಬಿಟ್ಟರು. 7ಆಗ ಬೆಜೆಕ್‌ನ ಅರಸನು, ‘‘ನಾನು ಎಪ್ಪತ್ತು
ಮಂದಿ ಅರಸರ ಕೈಕಾಲಿನ ಹೆಬ್ಬೆರಳುಗಳನ್ನು ಕತ್ತರಿಸಿ
ಬಿಟ್ಟಿದ್ದೆ. ಆ ಅರಸರು ನನ್ನ ಮೇಜಿನ ಕೆಳಗೆ ಬೀಳುವ
ಆಹಾರದ ಚೂರುಗಳನ್ನು ತಿನ್ನುವಂತೆ ಮಾಡಿದ್ದೆ. ನಾನು
ಅವರಿಗೆ ಮಾಡಿದಂತೆಯೇ ದೇವರು ಈಗ ನನಗೆ ಮಾಡು
ತ್ತಿದ್ದಾನೆ’’ ಎಂದು ಹೇಳಿದನು. ಯೆಹೂದ್ಯರು ಬೆಜೆಕ್‌ನ
ಅರಸನನ್ನು ಜೆರುಸಲೇಮಿಗೆ ತೆಗೆದುಕೊಂಡು ಬಂದರು;
ಅವನು ಅಲ್ಲಿ ಸತ್ತು ಹೋದನು.
8ಯೆಹೂದ್ಯರು ಜೆರುಸಲೇಮಿನ ವಿರುದ್ಧ ಯುದ್ಧ
ಮಾಡಿ ಅದನ್ನು ಗೆದ್ದುಕೊಂಡರು. ಯೆಹೂದ್ಯರು ಜೆರುಸ
ಲೇಮಿನ ಜನರನ್ನು ಖಡ್ಗಗಳಿಂದ ಕೊಂದು ನಗರವನ್ನು
ಸುಟ್ಟುಹಾಕಿದರು. 9ತರುವಾಯ ಯೆಹೂದ್ಯರು ಉಳಿದಿ
ರುವ ಕಾನಾನ್ಯರೊಂದಿಗೆ ಯುದ್ಧಮಾಡಲು ಹೋದರು.
ಆ ಕಾನಾನ್ಯರು ಬೆಟ್ಟಪ್ರದೇಶ, ನೆಗೆವ್ ಮತ್ತು ಪಶ್ಚಿಮದ
ಇಳಕಲಿನ ಪ್ರದೇಶದಲ್ಲಿ ವಾಸ ಮಾಡಿಕೊಂಡಿದ್ದರು.
10ತರುವಾಯ ಯೆಹೂದ್ಯರು ಹೆಬ್ರೋನ್ ನಗರ
ದಲ್ಲಿದ್ದ ಕಾನಾನ್ಯರೊಂದಿಗೆ ಯುದ್ಧಮಾಡಲು
ಹೋದರು. (ಹೆಬ್ರೋನ್ ನಗರವನ್ನು ಕಿರ್ಯತರ್ಬ
ಎಂದು ಕರೆಯುತ್ತಿದ್ದರು.) ಯೆಹೂದ್ಯರು ಶೇಷೈ,
ಅಹೀಮನ್ ಮತ್ತು ತಲ್ಮೈ* ಎಂಬವರನ್ನು ಸೋಲಿಸಿ
ಬಿಟ್ಟರು.

### ಕಾಲೇಬ್ ಮತ್ತು ಅವನ ಮಗಳು

11ಯೆಹೂದ್ಯರು ಆ ಸ್ಥಳವನ್ನು ಬಿಟ್ಟು ದೆಬೀರ ನಗರಕ್ಕೆ
ವಿರುದ್ಧವಾಗಿ ಯುದ್ಧಮಾಡಲು ಹೋದರು. (ದೆಬೀರಕ್ಕೆ
ಮುಂಚೆ ಕಿರ್ಯತ್‌ಸೇಫೆರ್ ಎಂಬ ಹೆಸರಿತ್ತು.)
12ಯೆಹೂದ್ಯರು ಯುದ್ಧ ಆರಂಭಿಸುವ ಮುನ್ನ
ಕಾಲೇಬನು ಜನರಿಗೆ, ‘‘ಕಿರ್ಯತ್ ಸೇಫೆರನ್ನು ಗೆದ್ದು
ಕೊಳ್ಳಬೇಕೆಂಬುದು ನನ್ನ ಇಚ್ಛೆ. ಆ ನಗರದ ಮೇಲೆ ಧಾಳಿ
ಮಾಡಿ ಅದನ್ನು ಗೆದ್ದುಕೊಟ್ಟವನಿಗೆ ನಾನು ನನ್ನ ಮಗಳಾದ
ಅಕ್ಸಾಳನ್ನು ಮದುವೆ ಮಾಡಿಕೊಡುತ್ತೇನೆ’’ ಎಂದು
ಹೇಳಿದನು.
13ಕಾಲೇಬನಿಗೆ ಕೆನಜನೆಂಬ ತಮ್ಮನಿದ್ದನು. ಕೆನಜನಿಗೆ
ಒತ್ನೀಯೇಲನೆಂಬ ಮಗನಿದ್ದನು. ಒತ್ನೀಯೇಲನು
ಕಿರ್ಯತ್‌ಸೇಫೆರನ್ನು ಗೆದ್ದುಕೊಂಡನು. ಅದಕ್ಕಾಗಿ

**ಬೆಜೆಕಿನ ಅರಸು** ‘‘ಅದೋನೀ ಬೆಜೆಕ್’’ ಎಂದು ಹೆಸರಿರಬಹುದು.

**ಶೇಷೈ, ಅಹೀಮನ್ ಮತ್ತು ತಲ್ಮೈ** ಈ ಮೂವರು ಅನಾಕನ ಮಕ್ಕಳು.
ಅವರು ದೈತ್ಯರಾಗಿದ್ದರು. ನೋಡಿರಿ ಅರಣ್ಯಕಾಂಡ 13:22

ಕಾಲೇಬನು ತನ್ನ ಮಗಳಾದ ಅಕ್ಷಾಳನ್ನು ಒತ್ನೀಯೇಲನ
ಜೊತೆ ಮದುವೆ ಮಾಡಿಕೊಟ್ಟನು.
14ಅಕ್ಷಾಳು ಒತ್ನಿಯೇಲನ ಜೊತೆ ವಾಸಿಸಲು
ಹೋದಳು. ಒತ್ನೀಯೇಲನು ಅಕ್ಷಾಳಿಗೆ,* “ನಿನ್ನ ತಂದೆ
ಯಿಂದ ಸ್ವಲ್ಪ ಭೂಮಿಯನ್ನು ಕೇಳು” ಎಂದು ಹೇಳಿ
ದನು. ಅಕ್ಷಾಳು ತನ್ನ ತಂದೆಯ ಹತ್ತಿರ ಹೋದಳು. ಅವಳು
ತನ್ನ ಕತ್ತೆಯ ಮೇಲಿಂದ ಇಳಿದಾಗ, “ನಿನಗೇನು
ಬೇಕು?” ಎಂದು ಕಾಲೇಬನು ಕೇಳಿದನು.
15ಅದಕ್ಕೆ ಅವಳು, “ನನಗೊಂದು ದಾನ ಕೊಡ
ಬೇಕು.* ನೀನು ನನಗೆ ನೆಗೆವಿನಲ್ಲಿ ನೀರಿಲ್ಲದ ಮರು
ಭೂಮಿಯನ್ನು ಕೊಟ್ಟಿರುವೆ. ದಯವಿಟ್ಟು ನನಗೆ ಸ್ವಲ್ಪ
ನೀರಿನ ಬುಗ್ಗೆಗಳಿರುವ ಭೂಮಿಯನ್ನು ಕೊಡು”
ಎಂದಳು. ಅವಳು ಕೇಳಿಕೊಂಡಂತೆಯೇ ಕಾಲೇಬನು
ಅವಳಿಗೆ ಮೇಲಿನ ಮತ್ತು ಕೆಳಗಿನ ಬುಗ್ಗೆಗಳನ್ನು ಕೊಟ್ಟನು.
16ಕೇನ್ಯರು (ಕೇನ್ಯರು ಮೋಶೆಯ ಮಾವನ ಗೋತ್ರ
ದವರಾಗಿದ್ದರು.) ಖರ್ಜೂರ ನಗರವನ್ನು (ಜೆರಿಕೋ
ವನ್ನು) ಬಿಟ್ಟು ಯೆಹೂದ್ಯರ ಸಂಗಡ ಹೋದರು. ಅವರು
ನೆಗೆವಿನಲ್ಲಿ ಅರಾದ್ ನಗರದ ಹತ್ತಿರವಿದ್ದ ಯೆಹೂದ ಅರ
ಣ್ಯಕ್ಕೆ ಬಂದು ಅಲ್ಲಿನ ಜನರ ಸಂಗಡ ವಾಸ ಮಾಡಿದರು.
17ಕಾನಾನ್ಯರಾಗಿದ್ದ ಕೆಲವರು ಚೆಫತ್ ಎಂಬ ನಗರದಲ್ಲಿ
ವಾಸಮಾಡಿಕೊಂಡಿದ್ದರು. ಯೆಹೂದ್ಯರು ಮತ್ತು ಸಿಮೆ
ಯೋನ್ಯರು ಆ ಕಾನಾನ್ಯರ ಮೇಲೆ ಧಾಳಿಮಾಡಿ ಆ
ನಗರವನ್ನು ಸಂಪೂರ್ಣವಾಗಿ ನಾಶಮಾಡಿದರು; ಅಲ್ಲದೆ
ಆ ನಗರಕ್ಕೆ ಹೊರ್ಮಾ* ಎಂದು ಹೆಸರಿಟ್ಟರು.
18ಯೆಹೂದ್ಯರು ಗಾಜಾ ನಗರವನ್ನೂ ಅದರ ಸುತ್ತ
ಮುತ್ತಲಿನ ಎಲ್ಲಾ ಸಣ್ಣ ಪಟ್ಟಣಗಳನ್ನೂ ಸ್ವಾಧೀನಪಡಿಸಿ
ಕೊಂಡರು. ಯೆಹೂದ್ಯರು ಅಷ್ಕಲೋನ್ ಮತ್ತು
ಎಕ್ರೋನ್ ನಗರಗಳನ್ನೂ ಅವುಗಳ ಸುತ್ತಮುತ್ತಲಿನ
ಎಲ್ಲಾ ಸಣ್ಣಪುಟ್ಟ ಪಟ್ಟಣಗಳನ್ನೂ ಸಹ ಸ್ವಾಧೀನಪಡಿಸಿ
ಕೊಂಡರು.
19ಯೆಹೂದ್ಯರು ಯುದ್ಧಮಾಡುವಾಗ ಯೆಹೋವನು
ಅವರ ಸಂಗಡ ಇದ್ದುದರಿಂದ ಅವರು ಬೆಟ್ಟಪ್ರದೇಶವ
ನ್ನೆಲ್ಲಾ ಸ್ವಾಧೀನಪಡಿಸಿಕೊಂಡರು. ಆದರೆ ಕಣಿವೆಯಲ್ಲಿ
ವಾಸಮಾಡುತ್ತಿದ್ದ ಜನರಲ್ಲಿ ಕಬ್ಬಿಣದ ರಥಗಳಿದ್ದುದ
ರಿಂದ ಯೆಹೂದ್ಯರು ಅವರನ್ನು ಸೋಲಿಸಲಾಗಲಿಲ್ಲ.
20ಹೆಬ್ರೋನಿಗೆ ಸಮೀಪದಲ್ಲಿರುವ ಭೂಮಿಯನ್ನು
ಕಾಲೇಬನಿಗೆ ಕೊಡುವುದಾಗಿ ಮೋಶೆಯು ವಾಗ್ದಾನ
ಮಾಡಿದ್ದನು. ಆದುದರಿಂದ ಆ ಭೂಮಿಯನ್ನು
ಕಾಲೇಬನ ಕುಟುಂಬದವರಿಗೆ ಕೊಡಲಾಯಿತು.
ಕಾಲೇಬನ ಜನರು ಅನಾಕನ ಮೂರುಜನ ಮಕ್ಕಳನ್ನು*
ಆ ಪ್ರದೇಶದಿಂದ ಬಲವಂತವಾಗಿ ಹೊರಗಟ್ಟಿದರು.

### ಬೆನ್ಯಾಮೀನನ ಜನರು ಜೆರುಸಲೇಮಿನಲ್ಲಿ ನೆಲೆಸಿದರು

21ಬೆನ್ಯಾಮೀನನ ಕುಲದವರಿಗೆ ಯೆಬೂಸಿಯರನ್ನು
ಜೆರುಸಲೇಮಿನಿಂದ ಹೊರದೂಡುವುದು ಸಾಧ್ಯವಾಗ
ಲಿಲ್ಲ. ಅದಕ್ಕಾಗಿ ಇಂದಿನವರೆಗೂ ಅವರು ಬೆನ್ಯಾಮೀನ
ರೊಡನೆ ಜೆರುಸಲೇಮಿನಲ್ಲಿಯೇ ವಾಸವಾಗಿದ್ದಾರೆ.

### ಯೋಸೇಫನ ವಂಶದವರು ಬೇತೇಲನ್ನು ವಶಪಡಿಸಿಕೊಂಡರು

22-23ಯೋಸೇಫನ ಕುಲದವರು ಬೇತೇಲ್ ನಗರದ
ಮೇಲೆ ದಾಳಿಮಾಡಲು ಹೋದರು. (ಹಿಂದೆ ಬೇತೇಲನ್ನು
ಲೂಜ್ ಎಂದು ಕರೆಯುತ್ತಿದ್ದರು.) ಯೆಹೋವನು
ಯೋಸೇಫನ ಕುಲದವರ ಸಂಗಡ ಇದ್ದನು. ಯೋಸೇಫನ
ಕುಲದವರು ಬೇತೇಲ್ ನಗರಕ್ಕೆ ಕೆಲವು ಜನ ಗೂಢಚಾರ
ರನ್ನು ಕಳುಹಿಸಿದರು. ಇವರು ಬೇತೇಲ್ ನಗರವನ್ನು ವಶ
ಪಡಿಸಿಕೊಳ್ಳುವ ಮಾರ್ಗಗಳ ಬಗ್ಗೆ ಯೋಚಿಸುತ್ತಿದ್ದರು.
24ಆ ಗೂಢಚಾರರು ಬೇತೇಲ್ ನಗರದಲ್ಲಿ ಸಂಚರಿಸುತ್ತಿ
ದ್ದಾಗ ಒಬ್ಬನು ನಗರದಿಂದ ಹೊರಬರುವುದನ್ನು
ನೋಡಿದರು. ಗೂಢಚಾರರು ಅವನಿಗೆ, “ನಮಗೆ ಈ
ನಗರದೊಳಗೆ ಹೋಗಲು ಮಾಡಿರುವ ಗುಪ್ತಮಾರ್ಗ
ವನ್ನು ತೋರಿಸು. ನಾವು ಈ ಪಟ್ಟಣದ ಮೇಲೆ ಧಾಳಿ
ಮಾಡಬೇಕೆಂದಿದ್ದೇವೆ. ನೀನು ನಮಗೆ ಸಹಾಯ
ಮಾಡಿದರೆ ನಿನಗೆ ದಯೆತೋರುವೆವು” ಎಂದರು.
25ಅವನು ಗೂಢಚಾರರಿಗೆ ಗುಪ್ತಮಾರ್ಗವನ್ನು ತೋರಿ
ಸಿದನು. ಯೋಸೇಫನ ಕುಲದವರು ಬೇತೇಲ್ ನಿವಾಸಿ
ಗಳನ್ನು ತಮ್ಮ ಖಡ್ಗಗಳಿಂದ ಸಂಹರಿಸಿದರು. ಆದರೆ
ಅವರು ತಮಗೆ ಸಹಾಯ ಮಾಡಿದ ಆ ಮನುಷ್ಯನನ್ನೂ
ಅವನ ಕುಟುಂಬದವರನ್ನೂ ಕೊಲ್ಲದೆ ಕಳುಹಿಸಿಬಿಟ್ಟರು.
26ಆ ಮನುಷ್ಯನು ಹಿತ್ತಿಯರ ದೇಶಕ್ಕೆ ಹೋಗಿ ಅಲ್ಲೊಂದು
ನಗರವನ್ನು ಕಟ್ಟಿದನು. ಅದಕ್ಕೆ ಲೂಜ್ ಎಂದು ಹೆಸರಿ
ಟ್ಟನು. ಇಂದಿಗೂ ಆ ಪಟ್ಟಣದ ಹೆಸರು ಲೂಜ್ ಎಂದೇ
ಇದೆ.

### ಕಾನಾನ್ಯರ ವಿರುದ್ಧ ಯುದ್ಧ

27ಬೇತ್‌ಷೆಯಾನ್, ತಾನಾಕ್, ದೋರ್,
ಇಬ್ಲೆಯಾಮ್, ಮೆಗಿದ್ದೋ ನಗರಗಳಲ್ಲಿ ಮತ್ತು ಅವುಗಳ
ಸುತ್ತಮುತ್ತಲಿನ ಸಣ್ಣ ಪಟ್ಟಣಗಳಲ್ಲಿ ಕಾನಾನ್ಯರು

---

**ಒತ್ನೀಯೇಲನು ಅಕ್ಷಾಳಿಗೆ** ಅಥವಾ “ಅಕ್ಷಾಳು ಒತ್ನೀಯೇಲನಿಗೆ.”

**ನನಗೊಂದು … ಕೊಡಬೇಕು** ಅಥವಾ “ದಯವಿಟ್ಟು ನನ್ನನ್ನು ಸ್ವಾಗತಿಸು” ಅಥವಾ “ನನಗೊಂದು ನೀರಿನ ಬುಗ್ಗೆಯನ್ನು ಕೊಡು.”

**ಹೊರ್ಮಾ** ಇದು “ಸಂಪೂರ್ಣ ನಾಶಮಾಡು” ಎಂಬ ಅರ್ಥಬರುವ ಶಬ್ದದಂತೆ ಇದೆ.

**ಮೂರುಜನ ಮಕ್ಕಳು** ಶೇಷೈ, ಅಹೀಮನ್ ಮತ್ತು ತಲ್ಮೈ

ವಾಸವಾಗಿದ್ದರು. ಕಾನಾನ್ಯರನ್ನು ಈ ನಗರಗಳಿಂದ ಹೊರದೂಡುವುದು ಮನಸ್ಸೆಕುಲದವರಿಗೆ ಸಾಧ್ಯವಾಗ ಲಿಲ್ಲ. ಆದುದರಿಂದ ಕಾನಾನ್ಯರು ನೆಲೆನಿಂತರು. ಅವರು ತಮ್ಮ ಮನೆಗಳನ್ನು ಬಿಡಲು ಸಮ್ಮತಿಸಲಿಲ್ಲ.
28ಅನಂತರ ಇಸ್ರೇಲರು ಪ್ರಬಲರಾಗಿ ಬಲವಂತದಿಂದ ಕಾನಾನ್ಯರನ್ನು ತಮ್ಮ ಗುಲಾಮರನ್ನಾಗಿ ಮಾಡಿಕೊಂಡರು. ಆದರೆ ಎಲ್ಲ ಕಾನಾನ್ಯರನ್ನೂ ಅವರ ಮನೆಗಳಿಂದ ಹೊರಗಟ್ಟಲು ಇಸ್ರೇಲರಿಗೆ ಸಾಧ್ಯವಾಗಲಿಲ್ಲ.

29ಎಫ್ರಾಯೀಮ್ ಕುಲದವರಿಗೂ ಹೀಗೆಯೇ ಆಯಿತು. ಕಾನಾನ್ಯರು ಗೆಜೆರಿನಲ್ಲಿ ವಾಸಮಾಡಿಕೊಂಡಿದ್ದರು. ಎಫ್ರಾಯೀಮ್ ಜನರಿಂದ ಕಾನಾನ್ಯರೆಲ್ಲರೂ ತಮ್ಮ ಪ್ರದೇಶವನ್ನು ಬಿಟ್ಟುಹೋಗುವಂತೆ ಮಾಡಲು ಸಾಧ್ಯವಾಗಲಿಲ್ಲ. ಆದುದರಿಂದ ಕಾನಾನ್ಯರು ಗೆಜೆರಿನಲ್ಲಿ ಎಫ್ರಾಯೀಮ್ಯರೊಂದಿಗೆ ನೆಲೆಸಿದರು.

30ಜೆಬುಲೂನ್ಯರ ಸಂಗಡವೂ ಹೀಗೆಯೇ ಆಯಿತು. ಕಿಟ್ರೋನ್ ಮತ್ತು ನಹಲೋಲ್ ನಗರಗಳಲ್ಲಿ ಕೆಲವು ಕಾನಾನ್ಯರು ವಾಸಮಾಡಿಕೊಂಡಿದ್ದರು. ಜೆಬುಲೂನ್ಯರು ಅವರನ್ನು ಆ ಪ್ರದೇಶದಿಂದ ಹೊರದೂಡಲಿಲ್ಲ. ಆ ಕಾನಾನ್ಯರು ಅಲ್ಲಿಯೇ ಉಳಿದುಕೊಂಡು ಜೆಬುಲೂನ್ಯರೊಂದಿಗೆ ವಾಸಮಾಡಿದರು. ಆದರೆ ಜೆಬುಲೂನ್ಯರು ಅವರನ್ನು ತಮ್ಮ ಗುಲಾಮರಂತೆ ಕೆಲಸ ಮಾಡಲು ಹಚ್ಚಿದರು.

31ಅಶೇರ್ಯರು ಅಕ್ಕೋ, ಚೀದೋನ್, ಅಹ್ಲಾಬ್, ಅಕ್ಜೀಬ್, ಹೆಲ್ಬಾ, ಅಫೀಕ್, ರೆಹೋಬ್ ಎಂಬ ನಗರಗಳನ್ನು ಸ್ವಾಧೀನಪಡಿಸಿಕೊಳ್ಳಲಾಗಲಿಲ್ಲ.
32ಅಶೇರ್ಯರು ತಮ್ಮ ಪ್ರದೇಶವನ್ನು ಬಿಡುವಂತೆ ಕಾನಾನ್ಯರನ್ನು ಒತ್ತಾಯಿಸಲಿಲ್ಲ. ಹೀಗಾಗಿ ಕಾನಾನ್ಯರು ಅಶೇರ್ಯರೊಡನೆ ಇರ ತೊಡಗಿದರು.
33ನಫ್ತಾಲ್ಯರಿಗೂ ಹೀಗೆಯೇ ಆಯಿತು. ನಫ್ತಾಲ್ಯರು ಅಲ್ಲಿಯ ಜನರನ್ನು ಬೇತ್‌ಷೆಮೆಷ್, ಬೇತನಾತ್ ನಗರಗಳಿಂದ ಹೊರದೂಡಲಿಲ್ಲ. ಹೀಗಾಗಿ ನಫ್ತಾಲ್ಯರು ಆ ನಗರಗಳ ಜನರೊಡನೆ ವಾಸಮಾಡ ತೊಡಗಿದರು. ಆ ಕಾನಾನ್ಯರು ನಫ್ತಾಲ್ಯರ ಗುಲಾಮರಾಗಿ ಕೆಲಸ ಮಾಡಿ ಕೊಂಡಿದ್ದರು.

34ಅಮೋರಿಯರು ದಾನ್‌ಕುಲದವರನ್ನು ಬೆಟ್ಟ ಪ್ರದೇಶದಲ್ಲಿಯೇ ವಾಸಿಸುವಂತೆ ಮಾಡಿದರು. ಅಮೋರಿಯರು ಕಣಿವೆಗೆ ಬರಲು ಅವಕಾಶಕೊಡಲಿಲ್ಲವಾದ್ದರಿಂದ ದಾನ್ ಕುಲದವರು ಬೆಟ್ಟಪ್ರದೇಶದಲ್ಲಿಯೇ ಉಳಿಯ ಬೇಕಾಯಿತು.
35ಅಮೋರಿಯರು ಹರ್‌ಹೆರೆಸ್ ಪರ್ವತ, ಅಯ್ಯಾಲೋನ್ ಮತ್ತು ಶಾಲ್ಬೀಮ್‌ಗಳಲ್ಲಿ ವಾಸಿಸ ಬೇಕೆಂದು ನಿರ್ಧರಿಸಿದರು. ತರುವಾಯ ಯೋಸೇಫ್ಯರು ಪ್ರಬಲರಾದರು. ಆಗ ಅವರು ಅಮೋರಿಯರನ್ನು ತಮ್ಮ ಗುಲಾಮರನ್ನಾಗಿ ಮಾಡಿಕೊಂಡರು.
36ಅಮೋರಿಯರ ಪ್ರದೇಶವು ಸ್ಕಾರ್ಪಿಯನ್ ಕಣಿವೆಯಿಂದ ಸೇಲಾದವರೆಗೆ ಮತ್ತು ಸೇಲಾದಿಂದ ಮುಂದೆ ಬೆಟ್ಟಪ್ರದೇಶಗಳವರೆಗೆ ಹಬ್ಬಿತ್ತು.

### ಬೋಕೀಮಿನಲ್ಲಿ ಯೆಹೋವನ ದೂತನು

2 ಯೆಹೋವನ ದೂತನು ಗಿಲ್ಗಾಲ್ ನಗರದಿಂದ ಬೋಕೀಮ್ ನಗರದವರೆಗೆ ಹೋದನು. ಆ ದೂತನು ಇಸ್ರೇಲರಿಗೆ ಯೆಹೋವನ ಒಂದು ಸಂದೇಶವನ್ನು ತಿಳಿಸಿದನು. ಆ ಸಂದೇಶವು ಹೀಗಿದೆ: ‘‘ನಾನು ನಿಮ್ಮನ್ನು ಈಜಿಪ್ಟಿನಿಂದ ಬಿಡಿಸಿ ಹೊರಗೆ ತಂದೆ. ನಾನು ನಿಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿದ ಪ್ರದೇಶಕ್ಕೆ ನಿಮ್ಮನ್ನು ಕರೆದುಕೊಂಡು ಬಂದೆನು. ‘ನಾನು ನಿಮ್ಮೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನು ಎಂದಿಗೂ ಮುರಿಯುವುದಿಲ್ಲ.
2ಆದರೆ ಅದಕ್ಕೆ ಪ್ರತಿಯಾಗಿ ನೀವು ಈ ಪ್ರದೇಶದಲ್ಲಿ ವಾಸಮಾಡುತ್ತಿರುವ ಜನಗಳೊಂದಿಗೆ ಯಾವ ಒಪ್ಪಂದವನ್ನೂ ಮಾಡಿಕೊಳ್ಳಬಾರದು. ಅವರ ಯಜ್ಞವೇದಿಕೆಗಳನ್ನು ನಾಶಮಾಡಬೇಕು’ ಎಂದು ನಾನು ನಿಮಗೆ ಹೇಳಿದ್ದೆ. ಆದರೆ ನೀವು ನನಗೆ ವಿಧೇಯರಾಗಲಿಲ್ಲ.

3‘‘ಆದ್ದರಿಂದ ನಾನು ನಿಮಗೆ ಹೇಳುವುದೇನಂದರೆ, ‘ಈ ಪ್ರದೇಶವನ್ನು ಬಿಟ್ಟುಹೋಗುವಂತೆ ನಾನು ಈ ಜನರನ್ನು ಬಲವಂತ ಮಾಡುವುದಿಲ್ಲ. ಈ ಜನರು ನಿಮಗೊಂದು ಸಮಸ್ಯೆಯಾಗುತ್ತಾರೆ. ಅವರು ನಿಮಗೊಂದು ಉರುಲಾಗುತ್ತಾರೆ. ಅವರ ಸುಳ್ಳು ದೇವರುಗಳು ನಿಮಗೆ ಬಲೆಯಂತೆ ಉರುಲಾಗುತ್ತವೆ.’’

4ದೂತನು ಜನರಿಗೆ ಯೆಹೋವನ ಈ ಸಂದೇಶವನ್ನು ಕೊಟ್ಟ ಮೇಲೆ ಜನರು ಗಟ್ಟಿಯಾಗಿ ಅತ್ತರು.
5ಆದುದರಿಂದ ಇಸ್ರೇಲರು ತಾವು ಗೋಳಾಡಿದ ಸ್ಥಳಕ್ಕೆ ಬೋಕೀಮ್* ಎಂದು ಕರೆದರು. ಬೋಕೀಮಿನಲ್ಲಿ ಇಸ್ರೇಲರು ಯೆಹೋವನಿಗೋಸ್ಕರ ಯಜ್ಞ ಮಾಡಿದರು.

### ಅವಿಧೇಯತೆ ಮತ್ತು ಸೋಲು

6ಯೆಹೋಶುವನು ಜನರನ್ನು ತಮ್ಮ ಮನೆಗಳಿಗೆ ಹೋಗಲು ಹೇಳಿದನು. ಪ್ರತಿಯೊಂದು ಕುಲದವರು ವಾಸಮಾಡಲು ತಮ್ಮತಮ್ಮ ಪ್ರದೇಶಕ್ಕೆ ಹೋದರು.
7ಯೆಹೋಶುವನು ಜೀವಂತವಿರುವವರೆಗೆ ಇಸ್ರೇಲರು ಯೆಹೋವನನ್ನು ಸೇವಿಸಿದರು. ಯೆಹೋಶುವನ ಮರಣಾನಂತರ ಬದುಕಿದ್ದ ಹಿರಿಯರ ಜೀವಮಾನದಲ್ಲಿಯೂ ಇಸ್ರೇಲರು ಯೆಹೋವನ ಸೇವೆಯನ್ನು ಮುಂದುವರಿಸಿಕೊಂಡು ಬಂದರು. ಈ ಹಿರಿಯರು ಇಸ್ರೇಲರಿಗಾಗಿ ಯೆಹೋವನು ಮಾಡಿದ ಎಲ್ಲಾ ಮಹತ್ಕಾರ್ಯಗಳನ್ನು ನೋಡಿದ್ದರು.
8ನೂನನ ಮಗನಾದ ಮತ್ತು

---

**ಬೋಕೀಮ್** ಇದರ ಅರ್ಥ ‘‘ಜನರು ಅಳುವುದು.’’

ಯೆಹೋವನ ಸೇವಕನಾದ ಯೆಹೋಶುವನು ನೂರ
ಹತ್ತು ವರ್ಷ ಬದುಕಿ ಮರಣಹೊಂದಿದನು. [9]ಇಸ್ರೇಲರು
ಯೆಹೋಶುವನನ್ನು ಅವನ ಸ್ವಾಸ್ತ್ಯ ಭೂಮಿಯಲ್ಲಿ
ಸಮಾಧಿ ಮಾಡಿದರು. ಅದು ಎಫ್ರಾಯೀಮ್ ಬೆಟ್ಟ
ಪ್ರದೇಶದಲ್ಲಿರುವ ಗಾಷ್ ಬೆಟ್ಟದ ಉತ್ತರ ದಿಕ್ಕಿನಲ್ಲಿ
ತಿಮ್ನತ್ ಹೆರೆಸಿನಲ್ಲಿತ್ತು.

[10]ಈ ಪೀಳಿಗೆಯವರೆಲ್ಲರು ಸತ್ತುಹೋದ ಮೇಲೆ
ಮುಂದಿನ ಪೀಳಿಗೆಯು ಬೆಳೆಯಿತು. ಈ ಹೊಸ ಪೀಳಿಗೆಗೆ
ಯೆಹೋವನ ಬಗ್ಗೆ ಮತ್ತು ಯೆಹೋವನು ಇಸ್ರೇಲಿನ
ಜನರಿಗಾಗಿ ಮಾಡಿದ ಮಹತ್ಕಾರ್ಯಗಳ ಬಗ್ಗೆ ಏನೂ
ಗೊತ್ತಿರಲಿಲ್ಲ. [11]ಇಸ್ರೇಲಿನ ಜನರು ದುಷ್ಕೃತ್ಯಗಳನ್ನು
ಮಾಡಿದರು ಮತ್ತು ಸುಳ್ಳುದೇವರಾದ ಬಾಳನ* ಸೇವೆ
ಮಾಡಿದರು. ಯೆಹೋವನು ಇಸ್ರೇಲರ ಈ ದುಷ್ಕೃತ್ಯ
ಗಳನ್ನು ನೋಡಿದನು. [12]ಯೆಹೋವನು ಇಸ್ರೇಲರನ್ನು
ಈಜಿಪ್ಟಿನಿಂದ ಬಿಡಿಸಿಕೊಂಡು ಬಂದಿದ್ದನು. ಅವರ
ಪೂರ್ವಿಕರು ಯೆಹೋವನನ್ನು ಆರಾಧಿಸುತ್ತಿದ್ದರು.
ಆದರೆ ಇಸ್ರೇಲರು ಯೆಹೋವನನ್ನು ಅನುಸರಿಸದೆ ತಮ್ಮ
ಸುತ್ತಮುತ್ತಲಿನ ಜನರ ಸುಳ್ಳುದೇವರುಗಳನ್ನು ಪೂಜಿ
ಸಲು ಆರಂಭಿಸಿದರು. ಆದ್ದರಿಂದ ಯೆಹೋವನಿಗೆ
ಕೋಪ ಬಂತು. [13]ಇಸ್ರೇಲರು ಯೆಹೋವನನ್ನು ಅನುಸ
ರಿಸದೆ ಬಾಳ್ ದೇವರನ್ನೂ ಅಷ್ಟೋರೆತ್* ದೇವತೆ
ಯನ್ನೂ ಪೂಜಿಸತೊಡಗಿದರು.

[14]ಯೆಹೋವನು ಇಸ್ರೇಲರ ಮೇಲೆ ಕೋಪ
ಗೊಂಡನು. ಶತ್ರುಗಳು ಇಸ್ರೇಲರ ಮೇಲೆ ದಾಳಿಮಾಡಿ
ಅವರ ಸ್ವತ್ತನ್ನು ತೆಗೆದುಕೊಳ್ಳುವಂತೆ ಯೆಹೋವನು
ಮಾಡಿದನು. ಸುತ್ತಮುತ್ತಲಿದ್ದ ಅವರ ಶತ್ರುಗಳು
ಅವರನ್ನು ಸೋಲಿಸುವಂತೆ ಯೆಹೋವನು ಮಾಡಿದನು.
ಇಸ್ರೇಲರು ಶತ್ರುಗಳಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಲು
ಆಗಲಿಲ್ಲ. [15]ಇಸ್ರೇಲರು ಯುದ್ಧಕ್ಕೆ ಹೋದಾಗಲೆಲ್ಲಾ
ಸೋಲನ್ನನುಭವಿಸಿದರು; ಏಕೆಂದರೆ ಯೆಹೋವನು
ಅವರ ಸಂಗಡವಿರಲಿಲ್ಲ. ಸುತ್ತಮುತ್ತಲಿನ ಜನರ ದೇವತೆ
ಗಳನ್ನು ಪೂಜಿಸಿದರೆ ಸೋಲಾಗುವುದೆಂದು ಈಗಾಗಲೇ
ಯೆಹೋವನು ಇಸ್ರೇಲರಿಗೆ ಮುನ್ನೆಚ್ಚರಿಕೆಯನ್ನು
ಕೊಟ್ಟಿದ್ದನು. ಇಸ್ರೇಲರು ಹೆಚ್ಚಿನ ಕಷ್ಟನಷ್ಟಗಳನ್ನು
ಅನುಭವಿಸಿದರು.

[16]ಆಗ ಯೆಹೋವನು ನ್ಯಾಯಾಧೀಶರೆಂಬ ಕೆಲವು
ನಾಯಕರನ್ನು ಆರಿಸಿದನು. ಈ ನಾಯಕರು ಇಸ್ರೇಲ
ರನ್ನು ಅವರ ವೈರಿಗಳಿಂದ ಕಾಪಾಡಿದರು. [17]ಆದರೆ
ಇಸ್ರೇಲರು ನ್ಯಾಯಾಧೀಶರ ಮಾತನ್ನು ಕೇಳಲಿಲ್ಲ.
ಅವರು ಯೆಹೋವನಿಗೆ ನಂಬಿಗಸ್ತರಾಗಿರದೆ ಬೇರೆ ಬೇರೆ
ದೇವರುಗಳನ್ನು ಅನುಸರಿಸಿದರು. ಹಿಂದೆ ಇಸ್ರೇಲರ
ಪೂರ್ವಿಕರು ಯೆಹೋವನ ಆಜ್ಞೆಗಳನ್ನು ಪಾಲಿಸುತ್ತಿ
ದ್ದರು. ಆದರೆ ಈಗ ಇಸ್ರೇಲರು ಬದಲಾಗಿ ಯೆಹೋವನ
ಆಜ್ಞಾಪಾಲನೆಯನ್ನು ನಿಲ್ಲಿಸಿಬಿಟ್ಟರು.

[18]ಅನೇಕ ಸಲ ಶತ್ರುಗಳು ಇಸ್ರೇಲರಿಗೆ ತುಂಬ ಕಷ್ಟ
ಗಳನ್ನು ಉಂಟು ಮಾಡುತ್ತಿದ್ದರು. ಇಸ್ರೇಲರು ಸಹಾಯ
ಕ್ಕಾಗಿ ಯೆಹೋವನಿಗೆ ಮೊರೆಯಿಡುತ್ತಿದ್ದರು; ಪ್ರತಿ
ಸಲವೂ ಯೆಹೋವನು ಅವರ ಗೋಳನ್ನು ಕೇಳಿ ಮರುಕ
ಪಡುತ್ತಿದ್ದನು. ಪ್ರತಿಸಲವೂ ಅವರನ್ನು ಶತ್ರುಗಳಿಂದ
ರಕ್ಷಿಸಲು ಒಬ್ಬ ನ್ಯಾಯಾಧೀಶನನ್ನು ಕಳುಹಿಸಿ
ಕೊಡುತ್ತಿದ್ದನು. ಯೆಹೋವನು ಆ ನ್ಯಾಯಾಧೀಶರ
ಜೊತೆಯಲ್ಲಿಯೇ ಇರುತ್ತಿದ್ದನು. ಹೀಗಾಗಿ ಪ್ರತಿಸಲವೂ
ಇಸ್ರೇಲರನ್ನು ಅವರ ಶತ್ರುಗಳಿಂದ ರಕ್ಷಿಸಲಾಯಿತು.
[19]ಆದರೆ ಪ್ರತಿಯೊಬ್ಬ ನ್ಯಾಯಾಧೀಶನು ಮರಣ ಹೊಂದಿ
ದಾಗ ಇಸ್ರೇಲರು ಪುನಃ ಪಾಪ ಮಾಡುತ್ತಿದ್ದರು ಮತ್ತು
ಸುಳ್ಳುದೇವರುಗಳನ್ನು ಪೂಜಿಸಲಾರಂಭಿಸುತ್ತಿದ್ದರು.
ಇಸ್ರೇಲರು ತುಂಬ ಮೊಂಡರಾಗಿದ್ದು ತಮ್ಮ ದುರ್ನಡತೆ
ಗಳನ್ನು ಬಿಡಲು ಸಿದ್ಧರಾಗಿರಲಿಲ್ಲ.

[20]ಹೀಗಾಗಿ ಯೆಹೋವನು ಇಸ್ರೇಲರ ಮೇಲೆ ಕೋಪ
ಗೊಂಡು, ‘‘ಈ ಜನಾಂಗದವರು ಅವರ ಪೂರ್ವಿಕರ
ಸಂಗಡ ನಾನು ಮಾಡಿಕೊಂಡ ಒಡಂಬಡಿಕೆಯನ್ನು
ಮುರಿದಿದ್ದಾರೆ. ಇವರು ನನ್ನ ಮಾತನ್ನು ಕೇಳಲಿಲ್ಲ. [21]ಆದ್ದ
ರಿಂದ ಇನ್ನು ಮುಂದೆ ನಾನು ಬೇರೆ ಜನಾಂಗಗಳನ್ನು
ಸೋಲಿಸಿ ಇಸ್ರೇಲರ ಮಾರ್ಗವನ್ನು ಸರಾಗಮಾಡುವು
ದಿಲ್ಲ. ಯೆಹೋಶುವನು ಮರಣ ಹೊಂದಿದಾಗ ಆ
ಜನಾಂಗದವರು ಇನ್ನೂ ಈ ಪ್ರದೇಶದಲ್ಲಿದ್ದರು. ಈ
ಪ್ರದೇಶದಲ್ಲಿ ವಾಸಿಸಲು ಆ ಜನಾಂಗಗಳಿಗೆ ಇನ್ನು
ಮೇಲೆಯೂ ಆಸ್ಪದಕೊಡುತ್ತೇನೆ. [22]ಇಸ್ರೇಲರು ತಮ್ಮ
ಪೂರ್ವಿಕರಂತೆ ಯೆಹೋವನ ಆಜ್ಞೆಗಳನ್ನು ಪಾಲಿಸು
ತ್ತಾರೆಯೇ ಎಂಬುದನ್ನು ನಾನು ಆ ಜನಾಂಗಗಳ ಮೂಲಕ
ಪರೀಕ್ಷಿಸಿ ನೋಡುತ್ತೇನೆ’’ ಎಂದನು. [23]ಯೆಹೋವನು
ಆ ಜನಾಂಗಗಳನ್ನು ಆ ಪ್ರದೇಶದಲ್ಲಿ ಇರುವು ದಕ್ಕೆ
ಬಿಟ್ಟನು. ಆ ಜನಾಂಗಗಳು ಈ ದೇಶವನ್ನು ಬಿಟ್ಟು
ಹೋಗುವಂತೆ ಯೆಹೋವನು ಒತ್ತಾಯಪಡಿಸಲಿಲ್ಲ.
ಅವರನ್ನು ಸೋಲಿಸಲು ಯೆಹೋಶುವನ ಸೈನ್ಯಕ್ಕೆ
ಸಹಾಯ ಮಾಡಲಿಲ್ಲ.

3 [1-2]ಇಸ್ರೇಲರ ಪ್ರದೇಶವನ್ನು ಬಿಟ್ಟುಹೋಗುವಂತೆ
ಯೆಹೋವನು ಉಳಿದೆಲ್ಲ ಜನಾಂಗದವರನ್ನು
ಒತ್ತಾಯಪಡಿಸಲಿಲ್ಲ. ಯೆಹೋವನು ಇಸ್ರೇಲರನ್ನು
ಪರೀಕ್ಷಿಸಬೇಕೆಂದಿದ್ದನು. ಈಗ ಬದುಕಿದ್ದ ಇಸ್ರೇಲರಲ್ಲಿ

---

**ಬಾಳ್** ಈ ಸುಳ್ಳು ದೇವರು ಮಳೆ ಮತ್ತು ಬಿರುಗಾಳಿಯನ್ನು ತರುವ ನೆಂದು ಮತ್ತು ಒಳ್ಳೆಯ ಬೆಳೆ ಬೆಳೆಯುವಂತೆ ಮಾಡುವನೆಂದು ಕಾನಾ ನ್ಯರು ನಂಬಿದ್ದರು.

**ಅಷ್ಟೋರೆತ್** ಈ ಸುಳ್ಳು ದೇವತೆಯು ಮಕ್ಕಳನ್ನು ಕೊಡುವಳೆಂದು ಕಾನಾನ್ಯರ ನಂಬಿಕೆಯಾಗಿತ್ತು. ಅವಳು ಅವರ ಪ್ರೇಮ ದೇವತೆ ಯಾಗಿದ್ದಳು.

ಯಾರೂ ಕಾನಾನ್ಯರ ಭೂಮಿಯನ್ನು ತೆಗೆದುಕೊಳ್ಳುವುದ
ಕ್ಕಾಗಿ ಯುದ್ಧ ಮಾಡಿರಲಿಲ್ಲ. ಅದಕ್ಕಾಗಿ ಯೆಹೋವನು
ಆ ಬೇರೆ ಜನಾಂಗದವರನ್ನು ಅವರ ದೇಶದಲ್ಲಿ ವಾಸಿಸಲು
ಬಿಟ್ಟನು. (ಆ ಯುದ್ಧಗಳಲ್ಲಿ ಭಾಗವಹಿಸದ ಈ ಇಸ್ರೇಲ
ರಿಗೆ ಯುದ್ಧಮಾಡುವುದನ್ನು ಕಲಿತುಕೊಳ್ಳಲು ಒಂದು
ಅವಕಾಶ ದೊರೆಯುವಂತೆ ಯೆಹೋವನು ಹೀಗೆ ಮಾಡಿ
ದ್ದನು.) ಯೆಹೋವನು ಆ ಭೂಮಿಯಲ್ಲಿ ವಾಸಿಸಲು
ಬಿಟ್ಟ ಜನಾಂಗಗಳ ಹೆಸರುಗಳು ಇಂತಿವೆ: 3ಐದು ಮಂದಿ
ಫಿಲಿಷ್ಟಿಯ ಪ್ರಭುಗಳು, ಕಾನಾನ್ಯರು, ಚೀದೋನ್ಯರು,
ಲೆಬನೋನ್ ಪರ್ವತಾವಳಿಯಲ್ಲಿ ಬಾಳ್‌ಹೆರ್ಮೋನ್
ಬೆಟ್ಟದಿಂದ ಲೆಬೂಹಮಾತಿನ ದಾರಿಯವರೆಗೆ ವಾಸವಾಗಿ
ರುವ ಹಿವ್ವಿಯರು. 4ಯೆಹೋವನು ಇಸ್ರೇಲರನ್ನು
ಪರೀಕ್ಷಿಸುವುದಕ್ಕಾಗಿ ಬೇರೆ ಜನಾಂಗದವರನ್ನು ಆ
ಪ್ರದೇಶದಲ್ಲಿ ಬಿಟ್ಟಿದ್ದನು. ಯೆಹೋವನು ಮೋಶೆಯ
ಮೂಲಕ ಅವರ ಪೂರ್ವಿಕರಿಗೆ ಕೊಟ್ಟ ಆಜ್ಞೆಗಳನ್ನು
ಇಸ್ರೇಲರು ಪಾಲಿಸುತ್ತಿದ್ದಾರೆಯೇ ಎಂಬುದನ್ನು ಆತನು
ನೋಡಬೇಕೆಂದಿದ್ದನು. 5ಇಸ್ರೇಲರು ಕಾನಾನ್ಯ, ಹಿತ್ತಿಯ,
ಅಮೋರಿಯ, ಪೆರಿಜ್ಜೀಯ, ಹಿವ್ವಿಯ, ಯೆಬೂಸಿಯ
ಜನಾಂಗಗಳೊಡನೆ ವಾಸ ಮಾಡತೊಡಗಿದರು.
6ಇಸ್ರೇಲರು ಅವರ ಕನ್ಯೆಯರನ್ನು ಮದುವೆಯಾಗ
ತೊಡಗಿದರು ಮತ್ತು ತಮ್ಮ ಕನ್ಯೆಯರನ್ನು ಅವರ
ಕುಮಾರರಿಗೆ ಮದುವೆ ಮಾಡಿ ಕೊಟ್ಟರು ಮತ್ತು ಅವರ
ದೇವರುಗಳನ್ನು ಪೂಜಿಸಲು ಪ್ರಾರಂಭಿಸಿದರು.

## ಒತ್ನೀಯೇಲ್ ಪ್ರಥಮ ನ್ಯಾಯಾಧೀಶ

7ಇಸ್ರೇಲರ ದುಷ್ಕೃತ್ಯಗಳನ್ನು ಯೆಹೋವನು ನೋಡಿ
ದನು. ಇಸ್ರೇಲರು ತಮ್ಮ ದೇವರಾದ ಯೆಹೋವನನ್ನು
ಮರೆತು ಬಾಳ್ ಮತ್ತು ಅಶೇರ್* ಎಂಬ ಸುಳ್ಳು ದೇವರು
ಗಳ ಸೇವೆಮಾಡುತ್ತಿದ್ದರು. 8ಇಸ್ರೇಲರ ಮೇಲೆ
ಯೆಹೋವನು ಕೋಪಿಸಿಕೊಂಡಿದ್ದನು. ಆರಾಮ್‌ನ
ಹರೇಮ್* ರಾಜ್ಯದ ಅರಸನಾದ ಕೂಷನ್ ರಿಷಾತ
ಯಿಮ್ ಎಂಬವನು ಅವರನ್ನು ಸೋಲಿಸುವುದಕ್ಕೂ
ಆಳುವುದಕ್ಕೂ ಯೆಹೋವನು ಆಸ್ಪದಕೊಟ್ಟನು.
ಇಸ್ರೇಲಿನ ಜನರು ಎಂಟು ವರ್ಷ ಆ ಅರಸನ ಅಧೀನದ
ಲ್ಲಿದ್ದರು. 9ಇಸ್ರೇಲರು ಸಹಾಯಕ್ಕಾಗಿ ಯೆಹೋವನಿಗೆ
ಮೊರೆಯಿಟ್ಟರು. ಅವರನ್ನು ರಕ್ಷಿಸಲು ಯೆಹೋವನು
ಒಬ್ಬ ಮನುಷ್ಯನನ್ನು ಕಳುಹಿಸಿದನು. ಆ ಮನುಷ್ಯನ
ಹೆಸರು ಒತ್ನೀಯೇಲ. ಅವನು ಕೆನಜ ಎಂಬವನ ಮಗನು.
ಕೆನಜನು ಕಾಲೇಬನ ತಮ್ಮ. ಒತ್ನೀಯೇಲನು
ಇಸ್ರೇಲರನ್ನು ರಕ್ಷಿಸಿದನು. 10ಒತ್ನೀಯೇಲನ ಮೇಲೆ
ಯೆಹೋವನ ಆತ್ಮ ಬಂದಿತು; ಆದ್ದರಿಂದ ಅವನು
ಇಸ್ರೇಲರ ನ್ಯಾಯಾಧೀಶನಾದನು. ಒತ್ನೀಯೇಲನು
ಇಸ್ರೇಲರನ್ನು ಯುದ್ಧಕ್ಕೆ ಕರೆದೊಯ್ದನು. ಅರಾಮಿನ
ಅರಸನಾದ ಕೂಷನ್‌ರಿಷಾತಯಿಮನನ್ನು ಸೋಲಿಸಲು
ಯೆಹೋವನು ಒತ್ನೀಯೇಲನಿಗೆ ಸಹಾಯ ಮಾಡಿದನು.
11ಆದುದರಿಂದ ನಲವತ್ತು ವರ್ಷಗಳ ಕಾಲದವರೆಗೆ
ಅಂದರೆ ಕೆನಜನ ಮಗನಾದ ಒತ್ನೀಯೇಲನ ಮರಣದ
ವರೆಗೆ ಆ ಪ್ರದೇಶದಲ್ಲಿ ಶಾಂತಿ ನೆಲೆಸಿತ್ತು.

## ನ್ಯಾಯಾಧೀಶ- ಏಹೂದ

12ಇಸ್ರೇಲರು ಪುನಃ ದುಷ್ಕೃತ್ಯಗಳನ್ನು ಮಾಡುವುದನ್ನು
ಯೆಹೋವನು ನೋಡಿದನು. ಆದುದರಿಂದ ಆತನು
ಮೋವಾಬ್ಯರ ಅರಸನಾದ ಎಗ್ಲೋನನಿಗೆ ಇಸ್ರೇಲರನ್ನು
ಸೋಲಿಸುವ ಶಕ್ತಿಯನ್ನು ಕೊಟ್ಟನು. 13ಇವನು ಅಮ್ಮೋನಿ
ಯರಿಂದ ಮತ್ತು ಅಮಾಲೇಕ್ಯರಿಂದ ಸಹಾಯವನ್ನು ಪಡೆ
ದನು. ಅವರು ಅವನೊಂದಿಗೆ ಸೇರಿಕೊಂಡು ಇಸ್ರೇಲರ
ಮೇಲೆ ಧಾಳಿಮಾಡಿದರು. ಎಗ್ಲೋನ್ ಮತ್ತು ಅವನ ಸೈನಿ
ಕರು ಇಸ್ರೇಲರನ್ನು ಸೋಲಿಸಿ ಅವರನ್ನು ಖರ್ಜೂರ ನಗರ
ದಿಂದ (ಜೆರಿಕೋ ನಗರದಿಂದ) ಹೊರದೂಡಿದರು.
14ಮೋವಾಬ್ಯರ ಅರಸನಾದ ಎಗ್ಲೋನನು ಇಸ್ರೇಲರ
ಮೇಲೆ ಹದಿನೆಂಟು ವರುಷ ಆಳ್ವಿಕೆ ಮಾಡಿದನು.

15ಜನರು ಯೆಹೋವನಿಗೆ ಮೊರೆಯಿಟ್ಟರು. ಇಸ್ರೇಲ
ರನ್ನು ರಕ್ಷಿಸಲು ಯೆಹೋವನು ಒಬ್ಬ ಮನುಷ್ಯನನ್ನು
ಕಳುಹಿಸಿದನು. ಆ ಮನುಷ್ಯನ ಹೆಸರು ಏಹೂದ. ಅವನು
ಎಡಚನಾಗಿದ್ದನು. ಅವನು ಬೆನ್ಯಾಮೀನ್‌ಕುಲದ ಗೇರ
ಎಂಬವನ ಮಗನಾಗಿದ್ದನು. ಇಸ್ರೇಲರು ಮೋವಾಬ್ಯರ
ಅರಸನಾದ ಎಗ್ಲೋನನಿಗೆ ಕಪ್ಪವನ್ನು ಕೊಡಲು ಏಹೂದ
ನನ್ನು ಕಳುಹಿಸಿದರು. 16ಏಹೂದನು ತನಗೊಂದು ಖಡ್ಗ
ವನ್ನು ಮಾಡಿಕೊಂಡನು. ಆ ಖಡ್ಗವು ಇಬ್ಬಾಯಿ ಖಡ್ಗ
ವಾಗಿದ್ದು ಹದಿನೆಂಟು ಅಂಗುಲ ಉದ್ದವಾಗಿತ್ತು. ಅದನ್ನು
ಅವನು ತನ್ನ ಬಲತೊಡೆಗೆ ಕಟ್ಟಿಕೊಂಡು ತನ್ನ ಬಟ್ಟೆಗಳಿಂದ
ಮುಚ್ಚಿಕೊಂಡನು.

17ಏಹೂದನು ಮೋವಾಬ್ಯರ ಅರಸನಾದ ಎಗ್ಲೋನನ
ಹತ್ತಿರ ಬಂದು ಅವನಿಗೆ ಕಪ್ಪದ ಹಣವನ್ನು ಕೊಟ್ಟನು.
(ಎಗ್ಲೋನನು ಬಹಳ ದಪ್ಪ ಮನುಷ್ಯನಾಗಿದ್ದನು.)
18ಏಹೂದನು ಎಗ್ಲೋನನಿಗೆ ಹಣವನ್ನು ಕೊಟ್ಟ ತರು
ವಾಯ ಅದನ್ನು ಹೊತ್ತುಕೊಂಡು ಬಂದ ಜನರನ್ನು
ಮನೆಗೆ ಕಳುಹಿಸಿಬಿಟ್ಟನು. 19ಏಹೂದನು ಗಿಲ್ಗಾಲಿನಲ್ಲಿ
ರುವ ವಿಗ್ರಹ ಸ್ಥಳದಿಂದ ಹಿಂತಿರುಗಿ ಎಗ್ಲೋನನ ಬಳಿಗೆ
ಬಂದು, ‘‘ಅರಸನೇ, ನಿನಗೆ ತಿಳಿಸಬೇಕಾದ ಒಂದು ರಹಸ್ಯ
ಸಂದೇಶವಿದೆ’’ ಎಂದು ಹೇಳಿದನು.

---

**ಅಶೇರ** ಕಾನಾನ್ಯರ ಮುಖ್ಯದೇವತೆ. ಅವಳು ಬಾಳನ ಹೆಂಡತಿ ಎಂದು ಜನರು ಆಗ ಭಾವಿಸಿದ್ದರು.

**ಆರಾಮ್ ನಹರೇಮ್** ಉತ್ತರ ಸಿರಿಯಾದಲ್ಲಿ ಒಂದು ಪ್ರದೇಶ. ಆರಾಮ್ ಎಂದರೆ ಎರಡು ನದಿಗಳ ಮಧ್ಯದ ಪ್ರದೇಶ. ಯೂಫ್ರೇಟೀಸ್ ಮತ್ತು ಟೈಗ್ರಿಸ್ ಎಂಬ ಎರಡು ನದಿಗಳ ಮಧ್ಯದಲ್ಲಿ ಈ ಸ್ಥಳ ಇತ್ತು.

ಅರಸನು, ‘‘ಸುಮ್ಮನಿರು’’ ಎಂದು ಹೇಳಿ ತನ್ನ ಸೇವಕ
ರೆಲ್ಲರನ್ನು ಕೋಣೆಯಿಂದ ಆಚೆ ಕಳುಹಿಸಿದನು.
20 ಏಹೂದನು ಅರಸನಾದ ಎಗ್ಲೋನನ ಹತ್ತಿರಕ್ಕೆ
ಹೋದನು. ಎಗ್ಲೋನನು ತಂಪಾದ ಅರಮನೆಯ ಮಹ
ಡಿಯ ಕೋಣೆಯಲ್ಲಿ ಒಬ್ಬಂಟಿಗನಾಗಿ ಕುಳಿತಿದ್ದನು.

ಆಗ ಏಹೂದನು, ‘‘ದೇವರಿಂದ ನಾನು ನಿನಗೆ ಒಂದು
ಸಂದೇಶವನ್ನು ತಂದಿದ್ದೇನೆ’’ ಎಂದನು. ಅರಸನು ತನ್ನ
ಸಿಂಹಾಸನದಿಂದ ಎದ್ದು ನಿಂತನು. ಅವನು ಏಹೂದನಿಗೆ
ತುಂಬ ಹತ್ತಿರದಲ್ಲಿದ್ದನು. 21 ಅರಸನು ತನ್ನ ಸಿಂಹಾಸನ
ದಿಂದ ಎದ್ದುನಿಂತಾಗ ಏಹೂದನು ತನ್ನ ಎಡಗೈಯನ್ನು
ಚಾಚಿ ತನ್ನ ಬಲತೊಡೆಗೆ ಕಟ್ಟಿದ್ದ ಕತ್ತಿಯನ್ನು ಹೊರ
ತೆಗೆದನು. ಏಹೂದನು ಆ ಖಡ್ಗವನ್ನು ಅರಸನ ಹೊಟ್ಟೆಗೆ
ತಿವಿದನು. 22 ಏಹೂದನು ಕತ್ತಿಯನ್ನು ಜೋರಾಗಿ ಒತ್ತಿದ್ದ
ರಿಂದ ಅದು ಹಿಡಿಯ ಸಹಿತ ಮುಳುಗಿಹೋಯಿತು.
ಅರಸನ ಕೊಬ್ಬಿದ ದೇಹದಲ್ಲಿ ಕತ್ತಿಯು ಸಂಪೂರ್ಣವಾಗಿ
ಮುಚ್ಚಿಕೊಂಡಿತು. ಆದುದರಿಂದ ಏಹೂದನು
ಎಗ್ಲೋನನ ಹೊಟ್ಟೆಯಲ್ಲಿಯೇ ಖಡ್ಗವನ್ನು ಬಿಟ್ಟನು.
23 ಏಹೂದನು ಕೋಣೆಯ ಹೊರಗೆ ಹೋಗಿ ಬಾಗಿಲು
ಹಾಕಿಕೊಂಡು ಬೀಗಹಾಕಿದನು.

24 ಏಹೂದನು ಹೋದ ಕೂಡಲೆ ಸೇವಕರು ಹಿಂದಿರುಗಿ
ಬಂದರು. ಕೋಣೆಯ ಬಾಗಿಲಿಗೆ ಬೀಗಹಾಕಿದ್ದನ್ನು ಸೇವ
ಕರು ನೋಡಿದರು. ‘‘ಅರಸನು ತನ್ನ ವಿಶ್ರಾಂತಿಕೋಣೆಯ
ಶೌಚಾಲಯದಲ್ಲಿ ಇರಬಹುದು’’ ಎಂದುಕೊಂಡರು.
25 ಹೀಗಾಗಿ ಸೇವಕರು ಬಹಳ ಹೊತ್ತಿನವರೆಗೆ ಅರಸನಿ
ಗಾಗಿ ಕಾಯುತ್ತಾ ಚಿಂತೆಗೊಳಗಾದರು. ಅವರು ಬೀಗದ
ಕೈಯನ್ನು ತಂದು ಬಾಗಿಲುಗಳನ್ನು ತೆರೆದರು. ಸೇವಕರು
ಒಳಗೆ ಹೋದಾಗ ತಮ್ಮ ಅರಸನು ನೆಲದ ಮೇಲೆ ಸತ್ತು
ಬಿದ್ದಿರುವುದನ್ನು ಕಂಡರು.

26 ಸೇವಕರು ಅರಸನಿಗಾಗಿ ಕಾಯುತ್ತಾ ನಿಂತಿರುವಾಗ
ತಪ್ಪಿಸಿಕೊಂಡು ಹೋಗುವುದಕ್ಕೆ ಏಹೂದನಿಗೆ ಅವಕಾಶ
ಸಿಕ್ಕಿತು. ಏಹೂದನು ವಿಗ್ರಹಗಳ ಪಕ್ಕದಿಂದ ಹಾದು
27 ಸೆಯೀರಾ ಎಂಬ ಸ್ಥಳಕ್ಕೆ ಬಂದನು. ಅಲ್ಲಿ ಎಫ್ರಾ
ಯೀಮ್ ಬೆಟ್ಟಪ್ರದೇಶದಲ್ಲಿ ಅವನು ತುತ್ತೂರಿಯನ್ನು
ಊದಿದನು. ಇಸ್ರೇಲರು ತುತ್ತೂರಿಯ ಧ್ವನಿಯನ್ನು ಕೇಳಿ
ಬೆಟ್ಟದಿಂದ ಇಳಿದು ಏಹೂದನನ್ನು ಹಿಂಬಾಲಿಸಿ
ಹೋದರು. 28 ಏಹೂದನು ಇಸ್ರೇಲರಿಗೆ, ‘‘ನನ್ನನ್ನು
ಹಿಂಬಾಲಿಸಿರಿ, ನಮ್ಮ ಶತ್ರುಗಳಾದ ಮೋವಾಬ್ಯರನ್ನು
ಸೋಲಿಸಲು ಯೆಹೋವನು ನಮಗೆ ಸಹಾಯ
ಮಾಡಿದ್ದಾನೆ’’ ಎಂದನು.

ಇಸ್ರೇಲರು ಏಹೂದನನ್ನು ಹಿಂಬಾಲಿಸಿದರು. ಅವರು
ಜೋರ್ಡನ್ ನದಿಯ ಹಾಯಗಡಗಳನ್ನೆಲ್ಲಾ ವಶಪಡಿಸಿ
ಕೊಂಡರು. ಆ ಸ್ಥಳಗಳು ಮೋವಾಬಿಗೆ ಹೋಗುವ ದಾರಿ
ಯಲ್ಲಿದ್ದವು. ಜೋರ್ಡನ್ ನದಿಯನ್ನು ದಾಟಿಹೋಗಲು
ಇಸ್ರೇಲರು ಯಾರಿಗೂ ಅವಕಾಶ ಕೊಡಲಿಲ್ಲ.
29 ಇಸ್ರೇಲರು ದೃಢಕಾಯರೂ ಧೈರ್ಯಶಾಲಿಗಳೂ
ಆಗಿದ್ದ ಹತ್ತು ಸಾವಿರ ಮಂದಿ ಮೋವಾಬ್ಯರನ್ನು ಕೊಂದು
ಹಾಕಿದರು. ಒಬ್ಬ ಮೋವಾಬ್ಯನೂ ತಪ್ಪಿಸಿಕೊಳ್ಳಲಿಲ್ಲ.
30 ಅಂದಿನಿಂದ ಇಸ್ರೇಲರು ಮೋವಾಬ್ಯರನ್ನು ಆಳಲು
ಪ್ರಾರಂಭಿಸಿದರು. ಆ ಪ್ರದೇಶದಲ್ಲಿ ಎಂಭತ್ತು
ವರ್ಷಗಳವರೆಗೆ ಶಾಂತಿ ನೆಲೆಸಿತು.

### ನ್ಯಾಯಾಧೀಶನಾದ ಶಮ್ಗರ

31 ಏಹೂದನು ಇಸ್ರೇಲರನ್ನು ರಕ್ಷಿಸಿದ ತರುವಾಯ,
ಇನ್ನೊಬ್ಬ ವ್ಯಕ್ತಿಯು ಇಸ್ರೇಲರನ್ನು ರಕ್ಷಿಸಿದನು. ಅವನು
ಅನಾತನ* ಮಗನಾದ ಶಮ್ಗರ. ಶಮ್ಗರನು ಮೊನಚಾದ
ಕೋಲಿನಿಂದ ಆರುನೂರು ಮಂದಿ ಫಿಲಿಷ್ಟಿಯರನ್ನು
ಕೊಂದನು.

### ದೆಬೋರಾ- ಮಹಿಳಾ ನ್ಯಾಯಾಧೀಶೆ

4 ಏಹೂದನು ಮರಣ ಹೊಂದಿದ ಮೇಲೆ ಇಸ್ರೇಲರು
ಮತ್ತೆ ಯೆಹೋವನ ವಿರೋಧವಾಗಿ ಪಾಪ
ಮಾಡಿದರು. 2 ಆದ್ದರಿಂದ ಕಾನಾನ್ಯರ ಅರಸನಾದ
ಯಾಬೀನನು ಇಸ್ರೇಲರನ್ನು ಸೋಲಿಸುವಂತೆ
ಯೆಹೋವನು ಅವಕಾಶಮಾಡಿದನು. ಯಾಬೀನನು
ಹಾಚೋರ ಎಂಬ ನಗರದಲ್ಲಿ ಆಳುತ್ತಿದ್ದನು. ಸೀಸೆರ
ಎಂಬವನು ಅವನ ಸೇನಾಧಿಪತಿಯಾಗಿದ್ದನು. ಸೀಸೆರನು
ಹರೋಷೆತ್ ಹಗ್ಗೋಯಿಮ್ ಎಂಬ ಪಟ್ಟಣದಲ್ಲಿ ವಾಸ
ವಾಗಿದ್ದನು. 3 ಸೀಸೆರನ ಹತ್ತಿರ ಒಂಭೈನೂರು ಕಬ್ಬಿಣದ
ರಥಗಳಿದ್ದವು. ಅವನು ಇಪ್ಪತ್ತು ವರ್ಷಗಳ ಕಾಲ ಇಸ್ರೇಲ
ರನ್ನು ತುಂಬ ಬಾಧಿಸಿದನು. ಆದುದರಿಂದ ಇಸ್ರೇಲರು
ಸಹಾಯಕ್ಕಾಗಿ ಯೆಹೋವನಲ್ಲಿ ಮೊರೆಯಿಟ್ಟರು.

4 ಆಗ ದೆಬೋರಳೆಂಬ ಒಬ್ಬ ಪ್ರವಾದಿನಿ ಇದ್ದಳು.
ಅವಳು ಲಪ್ಪೀದೋತ ಎಂಬವನ ಪತ್ನಿಯಾಗಿದ್ದಳು.
ಅವಳು ಆಗ ಇಸ್ರೇಲಿನ ನ್ಯಾಯಾಧೀಶೆಯಾಗಿದ್ದಳು.
5 ಒಂದು ದಿನ, ಅವಳು ದೆಬೋರಳ ಖರ್ಜೂರದ ಮರ
ವೆಂದು ಪ್ರಸಿದ್ಧವಾದ ಮರದ ಕೆಳಗೆ ಕುಳಿತಿದ್ದಳು. ಆಗ
ಇಸ್ರೇಲಿನ ಜನರು ಅವಳ ಹತ್ತಿರ ಬಂದು ಸೀಸೆರನ ಬಗ್ಗೆ
ಏನು ಮಾಡಬೇಕು? ಎಂದು ಕೇಳಿದರು. ದೆಬೋರಳ
ಖರ್ಜೂರಮರವು ಎಫ್ರಾಯೀಮ್ ಬೆಟ್ಟಪ್ರದೇಶದ
ರಾಮಕ್ಕೂ ಬೇತೇಲಿಗೂ ಮಧ್ಯದಲ್ಲಿ ಇದೆ. 6 ದೆಬೋರಳು
ತನ್ನನ್ನು ಬಂದು ಕಾಣಬೇಕೆಂದು ಬಾರಾಕನೆಂಬ ವ್ಯಕ್ತಿಗೆ
ಹೇಳಿಕಳುಹಿಸಿದಳು. ಬಾರಾಕನು ಅಬೀನೋವಮನ
ಮಗ. ಬಾರಾಕನು ನಫ್ತಾಲಿ ಪ್ರದೇಶದ ಕೆದೆಷ್ ಎಂಬ

**ಅನಾತ** ಇದು ಕಾನಾನ್ಯರ ಯುದ್ಧದೇವತೆಯ ಹೆಸರು. ಇಲ್ಲಿ ಅದು
ಶಮ್ಗರನ ತಂದೆಯ ಹೆಸರು ಎಂದು ಇದ್ದರೂ ತಾಯಿಯ ಹೆಸರೂ
ಆಗಿರುವ ಸಂಭವವಿದೆ.

ಊರಲ್ಲಿ ವಾಸಮಾಡುತ್ತಿದ್ದನು. ದೆಬೋರಳು ಬಾರಾಕ
ನಿಗೆ, ‘‘ಇಸ್ರೇಲಿನ ದೇವರಾದ ಯೆಹೋವನು, ‘ನೀನು
ಹೋಗಿ ನಫ್ತಾಲಿ ಮತ್ತು ಜೆಬುಲೂನ್ ಕುಲಗಳವರ ಹತ್ತು
ಸಾವಿರ ಜನರನ್ನು ಸೇರಿಸಿ ಅವರನ್ನು ತಾಬೋರ್ ಬೆಟ್ಟಕ್ಕೆ
ಕರೆದುಕೊಂಡು ಹೋಗು. [7]ನಾನು ಯಾಬೀನನ
ಸೇನಾಧಿಪತಿಯಾದ ಸೀಸೆರನನ್ನು ನಿನ್ನ ಹತ್ತಿರ ಬರುವಂತೆ
ಮಾಡುತ್ತೇನೆ. ನಾನು ಸೀಸೆರನನ್ನೂ ಅವನ ರಥಗಳನ್ನೂ
ಅವನ ಸೈನ್ಯವನ್ನೂ ಕೀಷೋನ್ ನದಿಗೆ* ಬರುವಂತೆ
ಮಾಡುತ್ತೇನೆ. ಅಲ್ಲಿ ನೀನು ಸೀಸೆರನನ್ನು ಸೋಲಿಸುವಂತೆ
ಮಾಡುತ್ತೇನೆ’ ಎಂದು ಹೇಳಿದ್ದಾನೆ’’ ಎಂದಳು.

[8]ಆಗ ಬಾರಾಕನು ದೆಬೋರಳಿಗೆ, ‘‘ನೀನು
ನನ್ನೊಂದಿಗೆ ಬಂದರೆ ನಾನು ಹೋಗುವೆನು; ನೀನು
ನನ್ನೊಂದಿಗೆ ಬರದಿದ್ದರೆ ನಾನು ಹೋಗುವುದಿಲ್ಲ’’
ಎಂದನು.

[9]ಅದಕ್ಕೆ ದೆಬೋರಳು, ‘‘ನಿಸ್ಸಂದೇಹವಾಗಿ ನಾನು
ನಿನ್ನೊಂದಿಗೆ ಬರುತ್ತೇನೆ. ಆದರೆ ನಿನ್ನ ಈ ಮನೋಭಾವ
ದಿಂದಾಗಿ ಸೀಸೆರನನ್ನು ಸೋಲಿಸಿದ ಗೌರವ ನಿನಗೆ
ಸಲ್ಲುವುದಿಲ್ಲ. ಒಬ್ಬ ಹೆಂಗಸು ಸೀಸೆರನನ್ನು ಸೋಲಿಸು
ವಂತೆ ಯೆಹೋವನು ಮಾಡುತ್ತಾನೆ’’ ಎಂದು
ಉತ್ತರಿಸಿದಳು.

ದೆಬೋರಳು ಬಾರಾಕನ ಸಂಗಡ ಕೆದೆಷ್ ನಗರಕ್ಕೆ
ಹೋದಳು. [10]ಕೆದೆಷ್ ನಗರದಲ್ಲಿ ಬಾರಾಕನು ಜೆಬು
ಲೂನ್ ಮತ್ತು ನಫ್ತಾಲಿ ಕುಲದವರನ್ನು ಒಟ್ಟಿಗೆ ಸೇರಿಸಿ
ಆ ಕುಲಗಳಿಂದ ಹತ್ತು ಸಾವಿರ ಜನರನ್ನು ತನ್ನೊಂದಿಗೆ
ಬರುವಂತೆ ಮಾಡಿದನು. ದೆಬೋರಳು ಸಹ ಬಾರಾಕನ
ಸಂಗಡ ಹೋದಳು.

[11]ಹೆಬೆರನೆಂಬ ಒಬ್ಬ ಮನುಷ್ಯನಿದ್ದನು. ಅವನು ಕೇನ್ಯರ
ಕುಲದವನಾಗಿದ್ದನು. ಅವನು ಉಳಿದ ಕೇನ್ಯರನ್ನು ಬಿಟ್ಟು
ಚಾನನ್ನೀಮೆಂಬ ಊರಲ್ಲಿ ಓಕ್ ವೃಕ್ಷದ ಬಳಿ ಮನೆ ಮಾಡಿ
ಕೊಂಡಿದ್ದನು. (ಕೇನ್ಯರು ಹೋಬಾಬನ ಸಂತತಿಯವ
ರಾಗಿದ್ದರು. ಹೋಬಾಬನು ಮೋಶೆಯ ಮಾವನಾಗಿ
ದ್ದನು. (ಹೆಂಡತಿಯ ತಂದೆ). ಚಾನನ್ನೀಮ್ ಕೆದೆಷ್
ನಗರದ ಸಮೀಪದಲ್ಲಿತ್ತು.

[12]ಅಬೀನೋವಮನ ಮಗನಾದ ಬಾರಾಕನು
ತಾಬೋರ್ ಬೆಟ್ಟಕ್ಕೆ ಬಂದಿದ್ದಾನೆಂಬ ಸಮಾಚಾರ ಸೀಸೆರ
ನಿಗೆ ತಿಳಿಯಿತು. [13]ಸೀಸೆರನು ತನ್ನ ಒಂಭೈನೂರು ಕಬ್ಬಿಣದ
ರಥಗಳನ್ನು ಒಟ್ಟುಗೂಡಿಸಿದನು. ಸೀಸೆರನು ತನ್ನ ಎಲ್ಲಾ
ಜನರನ್ನು ತನ್ನ ಜೊತೆ ಸೇರಿಸಿಕೊಂಡನು. ಅವರು
ಹರೋಷೆತ್ ಹಗ್ಗೋಯಿಮ್‌ನಿಂದ ಕೀಷೋನ್ ನದಿಗೆ
ನಡೆದರು.

[14]ಆಗ ದೆಬೋರಳು ಬಾರಾಕನಿಗೆ, ‘‘ಈ ದಿನ
ಯೆಹೋವನು ಸೀಸೆರನನ್ನು ಸೋಲಿಸಲು ನಿನಗೆ
ಸಹಾಯ ಮಾಡುತ್ತಾನೆ. ಯೆಹೋವನು ನಿನಗಾಗಿ ದಾರಿ
ಯನ್ನು ಸುಗಮಗೊಳಿಸಿದ್ದಾನೆಂಬುದು ನಿನಗೆ ಖಚಿತವಾಗಿ
ಗೊತ್ತಿದೆ’’ ಎಂದು ಹೇಳಿದಳು. ಆದ್ದರಿಂದ ಬಾರಾಕನು
ಹತ್ತುಸಾವಿರ ಜನರೊಂದಿಗೆ ತಾಬೋರ್ ಬೆಟ್ಟದಿಂದ
ಇಳಿದನು.

[15]ಬಾರಾಕ ಮತ್ತು ಅವನ ಜನರು ಸೀಸೆರನ ಮೇಲೆ
ದಾಳಿ ಮಾಡಿದರು. ಯೆಹೋವನು ಸೀಸೆರನಲ್ಲಿ ಮತ್ತು
ಅವನ ಸೈನ್ಯದಲ್ಲಿ ಮತ್ತು ಅವನ ರಥಗಳಲ್ಲಿ ಗಲಿಬಿಲಿ
ಉಂಟುಮಾಡಿದನು. ಏನು ಮಾಡಬೇಕೆಂದು ಅವರಿಗೆ
ತಿಳಿಯಲಿಲ್ಲ. ಬಾರಾಕ ಮತ್ತು ಅವನ ಸೈನಿಕರು ಸೀಸೆರನ
ಸೈನ್ಯವನ್ನು ಸೋಲಿಸಿದರು. ಆದರೆ ಸೀಸೆರನು ತನ್ನ ರಥ
ವನ್ನು ಬಿಟ್ಟು ಓಡಿಹೋದನು. [16]ಬಾರಾಕ ಮತ್ತು ಅವನ
ಜನರು ಸೀಸೆರನ ಸೈನ್ಯವನ್ನು ಮತ್ತು ರಥಗಳನ್ನು
ಹರೋಷೆತ್ ಹಗ್ಗೋಯಿಮ್‌ನವರೆಗೆ ಬೆನ್ನಟ್ಟಿದರು.
ಬಾರಾಕ ಮತ್ತು ಅವನ ಜನರು ಖಡ್ಗದಿಂದ ಸೀಸೆರನ ಜನ
ರನ್ನು ಕೊಂದುಹಾಕಿದರು. ಸೀಸೆರನ ಜನರಲ್ಲಿ ಒಬ್ಬ
ನನ್ನೂ ಜೀವಂತವಾಗಿ ಬಿಡಲಿಲ್ಲ.

[17]ಆದರೆ ಸೀಸೆರನು ಓಡಿಹೋದನು. ಅವನು
ಯಾಯೇಲ ಎಂಬ ಒಬ್ಬ ಮಹಿಳೆ ವಾಸವಾಗಿದ್ದ ಗುಡಾರಕ್ಕೆ
ಬಂದನು. ಯಾಯೇಲಳು ಹೆಬೆರನ ಹೆಂಡತಿ. ಹೆಬೆರನು
ಕೇನ್ಯನಾಗಿದ್ದನು. ಹಾಚೋರಿನ ಅರಸನಾದ ಯಾಬೀನ
ಮತ್ತು ಕೇನ್ಯನಾದ ಹೆಬೆರನ ಕುಟುಂಬಗಳ ಮಧ್ಯೆ ಒಳ್ಳೆಯ
ಸಮಾಧಾನವಿದ್ದಿತು. ಆದಕ್ಕಾಗಿ ಸೀಸೆರನು ಯಾಯೇಲಳ
ಗುಡಾರಕ್ಕೆ ಓಡಿಹೋಗಿದ್ದನು. [18]ಸೀಸೆರನು ಬರುವು
ದನ್ನು ಯಾಯೇಲಳು ಕಂಡಳು. ಆದುದರಿಂದ ಅವನನ್ನು
ಬರಮಾಡಿಕೊಳ್ಳಲು ಹೊರಗೆ ಬಂದಳು, ಯಾಯೇಲಳು
ಸೀಸೆರನಿಗೆ, ‘‘ಸ್ವಾಮೀ, ನನ್ನ ಗುಡಾರದೊಳಗೆ ಬನ್ನಿ,
ಭಯಪಡಬೇಡಿ’’ ಎಂದು ಕರೆದಳು. ಆದುದರಿಂದ ಸೀಸೆ
ರನು ಗುಡಾರದೊಳಗೆ ಹೋದನು. ಅವಳು ಸೀಸೆರನ
ಮೇಲೆ ಕಂಬಳಿಯನ್ನು ಹೊದಿಸಿದಳು.

[19]ಸೀಸೆರನು ಯಾಯೇಲಳಿಗೆ, ‘‘ನನಗೆ ಬಾಯಾರಿಕೆ
ಯಾಗಿದೆ. ದಯವಿಟ್ಟು ಕುಡಿಯಲು ಸ್ವಲ್ಪ ನೀರನ್ನು
ಕೊಡು’’ ಎಂದು ಕೇಳಿದನು. ಯಾಯೇಲಳ ಬಳಿ ಪ್ರಾಣಿ
ಗಳ ಚರ್ಮದಿಂದ ಮಾಡಿದ ಒಂದು ಚೀಲವಿತ್ತು. ಆಕೆಯು
ಅದರಲ್ಲಿ ಹಾಲಿಟ್ಟಿದ್ದಳು. ಯಾಯೇಲಳು ಸೀಸೆರನಿಗೆ
ಒಂದು ಗುಟುಕು ಹಾಲನ್ನೇ ಕೊಟ್ಟಳು. ನಂತರ ಅವಳು
ಸೀಸೆರನನ್ನು ಮುಚ್ಚಿಬಿಟ್ಟಳು.

[20]ಆಗ ಸೀಸೆರನು ಯಾಯೇಲಳಿಗೆ, ‘‘ಹೋಗಿ ಗುಡಾ
ರದ ಬಾಗಿಲಿನ ಹತ್ತಿರ ನಿಂತುಕೊಂಡಿರು. ಯಾರಾದರೂ
ಬಂದು ‘ಗುಡಾರದಲ್ಲಿ ಯಾರಾದರೂ ಇದ್ದಾರೆಯೇ?’
ಎಂದು ಕೇಳಿದರೆ, ‘ಇಲ್ಲ’ ಎಂದು ಹೇಳು’’ ಎಂದನು.

---

**ಕೀಷೋನ್ ನದಿ** ಈ ನದಿಯು ತಾಬೋರ್ ಪರ್ವತದಿಂದ ಹತ್ತು ಮೈಲಿ ದೂರದಲ್ಲಿದೆ.

21 ಯಾಯೇಲಳು ಗುಡಾರದ ಗೂಟವನ್ನು ಮತ್ತು
ಕೊಡತಿಯನ್ನು ತೆಗೆದುಕೊಂಡು ಶಬ್ದಮಾಡದೆ ಸೀಸೆರನ
ಹತ್ತಿರ ಹೋದಳು. ಸೀಸೆರನು ಬಹಳ ದಣಿದಿದ್ದ ಕಾರಣ
ನಿದ್ರೆ ಮಾಡುತ್ತಿದ್ದನು. ಯಾಯೇಲಳು ಗುಡಾರದ ಗೂಟ
ವನ್ನು ಸೀಸೆರನ ತಲೆಯ ಒಂದು ಪಾರ್ಶ್ವದಲ್ಲಿ ಇಟ್ಟು
ಕೊಡತಿಯಿಂದ ಬಲವಾಗಿ ಹೊಡೆದಳು. ಆ ಗುಡಾರದ
ಗೂಟವು ಸೀಸೆರನ ತಲೆಯ ಮತ್ತೊಂದು ಪಾರ್ಶ್ವಕ್ಕೆ ತೂರಿ
ಬಂದು ಭೂಮಿಯಲ್ಲಿ ಸೇರಿತು. ಸೀಸೆರನು ಸತ್ತನು.
22 ಅದೇ ಕ್ಷಣ ಬಾರಾಕನು ಯಾಯೇಲಳ ಗುಡಾರದ
ಹತ್ತಿರಕ್ಕೆ ಬಂದನು. ಅವನನ್ನು ಬರಮಾಡಿಕೊಳ್ಳುವುದ
ಕ್ಕಾಗಿ ಯಾಯೇಲಳು ಹೊರಗೆ ಬಂದು, ''ಇಲ್ಲಿ ಒಳಗೆ
ಬನ್ನಿ . ನಾನು, ನೀವು ಹುಡುಕುತ್ತಿರುವ ಮನುಷ್ಯನನ್ನು
ತೋರಿಸುತ್ತೇನೆ'' ಎಂದಳು. ಬಾರಾಕನು ಯಾಯೇಲಳ
ಜೊತೆ ಗುಡಾರವನ್ನು ಪ್ರವೇಶಿಸಿದನು. ಅಲ್ಲಿ ಬಾರಾಕನು
ಕಣತಲೆಯಲ್ಲಿ ಗೂಟವನ್ನು ಜಡಿಸಿಕೊಂಡು ನೆಲದ
ಮೇಲೆ ಸತ್ತು ಬಿದ್ದಿದ್ದ ಸೀಸೆರನನ್ನು ಕಂಡನು.
23 ಆ ದಿನ ದೇವರು ಇಸ್ರೇಲರಿಗಾಗಿ ಕಾನಾನ್ಯ ರಾಜ
ನಾದ ಯಾಬೀನನನ್ನು ಸೋಲಿಸಿದನು. 24 ಆತನು ಇಸ್ರೇಲ
ರನ್ನು ಬಲಪಡಿಸಿದ್ದರಿಂದ ಅವರು ಕಾನಾನ್ಯ ಅರಸನಾದ
ಯಾಬೀನನನ್ನು ಸಂಪೂರ್ಣವಾಗಿ ಸೋಲಿಸಿ ಅವನನ್ನು
ನಿರ್ನಾಮ ಮಾಡಿದರು.

## ದೆಬೋರಳ ಗೀತೆ

5 ಇಸ್ರೇಲರು ಸೀಸೆರನನ್ನು ಸೋಲಿಸಿದ ದಿನ
ದೆಬೋರಳು ಮತ್ತು ಅಬೀನೋವಮನ ಮಗನಾದ
ಬಾರಾಕನು ಈ ಗೀತೆಯನ್ನು ಹಾಡಿದರು:

2 ಇಸ್ರೇಲರು ಯುದ್ಧ ಸನ್ನದ್ಧರಾಗುತ್ತಿದ್ದಾರೆ;
ಜನರು ಸ್ವಇಚ್ಛೆಯಿಂದ ಯುದ್ಧಕ್ಕೆ ಹೋಗಲು
ಒಪ್ಪಿದ್ದಾರೆ; ಯೆಹೋವನಿಗೆ ಸ್ತೋತ್ರವಾಗಲಿ!
3 ಕೇಳಿರಿ ಅರಸರೇ, ಗಮನಿಸಿರಿ ಆಳುವವರೇ!
ನಾನು ಹಾಡುವೆನು; ನಾನು ಯೆಹೋವನನ್ನು
ಕೀರ್ತಿಸುವೆನು. ಇಸ್ರೇಲಿನ ದೇವರಾದ
ಯೆಹೋವನಿಗೆ ನಾನು ಗಾನ ಮಾಡುವೆನು.
4 ಯೆಹೋವನೇ, ನೀನು ಹಿಂದೆ ಸೇಯೀರಿನ*
ಪ್ರದೇಶದಿಂದ ಬಂದೆ. ನೀನು ಎದೋಮ್ಯರ*
ಪ್ರದೇಶದಿಂದ ನಡೆದುಕೊಂಡು ಹೋದೆ. ನೀನು
ನಡೆಯುವಾಗ ಭೂಮಿ ನಡುಗಿತು; ಆಕಾಶ ಮಳೆ
ಗರೆಯಿತು. ಮೇಘಮಂಡಲವು ಹನಿಗರೆಯಿತು.
5 ಸೀನಾಯಿ ಬೆಟ್ಟದ ದೇವರಾದ ಯೆಹೋವನ
ಎದುರಿಗೆ, ಇಸ್ರೇಲರ ದೇವರಾದ ಯೆಹೋವನ
ಎದುರಿಗೆ ಪರ್ವತಗಳು ನಡುಗಿದವು.
6 ಅನಾತನ ಮಗನಾದ ಶಮ್ಗರನ ಕಾಲದಲ್ಲಿಯೂ
ಯಾಯೇಲಳ ದಿನಗಳಲ್ಲಿಯೂ ಮುಖ್ಯ ಮಾರ್ಗ
ಗಳು ಬರಿದಾಗಿದ್ದವು. ವ್ಯಾಪಾರಿಗಳು*
ಮತ್ತು ಪ್ರಯಾಣಿಕರು ಸೀಳುದಾರಿಯಿಂದ
ಹೋಗುತ್ತಿದ್ದರು.
7 ದೆಬೋರಳೇ, ನೀನು ಬರುವವರೆಗೆ, ನೀನು
ಇಸ್ರೇಲರಿಗೆ ತಾಯಿಯಾಗಿ ಬರುವವರೆಗೆ,
ಶೂರರೇ ಇರಲಿಲ್ಲ. ಇಸ್ರೇಲಿನಲ್ಲಿ ವೀರರೇ
ಇರಲಿಲ್ಲ.
8 ಅವರು ಹೊಸ ದೇವರುಗಳನ್ನು ಆರಿಸಿ ಕೊಂಡರು;
ಅದಕ್ಕಾಗಿ ಅವರು ತಮ್ಮ ಪಟ್ಟಣ ದ್ವಾರಗಳಲ್ಲಿ
ಯುದ್ಧ ಮಾಡಬೇಕಾಯಿತು. ಇಸ್ರೇಲರ ನಲ
ವತ್ತು ಸಾವಿರ ಸೈನಿಕರಲ್ಲಿ ಒಬ್ಬನಿಗೂ ಗುರಾಣಿ
ಬರ್ಜಿಗಳಿರಲಿಲ್ಲ.

9 ''ನನ್ನ ಹೃದಯವು ಇಸ್ರೇಲಿನ ಸೇನಾಧಿಪತಿಗಳ
ಸಂಗಡ ವಿದೆ. ಈ ಸೇನಾಧಿಪತಿಗಳು ಇಸ್ರೇಲಿಗಾಗಿ
ಯುದ್ಧ ಮಾಡಲು ಸ್ವಇಚ್ಛೆಯಿಂದ ಬಂದರು.
ಯೆಹೋವನಿಗೆ ಸ್ತೋತ್ರವಾಗಲಿ.
10 ಬಿಳಿಯ ಕತ್ತೆಗಳ ಮೇಲೆ ಸವಾರಿ ಮಾಡುವವರೇ,
ತಡಿಯ ಕಂಬಳಿಯ ಮೇಲೆ ಕುಳಿತುಕೊಳ್ಳು
ವವರೇ, ಮಾರ್ಗಗಳ ಮೇಲೆ ಹೋಗುವ
ಪ್ರಯಾಣಿ ಕರೇ, ಗಮನಿಸಿರಿ!
11 ತಾಳ ಝುಲ್ಲರಿಗಳ ಧ್ವನಿಯನ್ನು ಕೇಳಿರಿ; ಬಾವಿಗಳ
ಹತ್ತಿರ ನೆರೆದ ಜನಸಮೂಹದ ಧ್ವನಿಯನ್ನು ಕೇಳಿರಿ;
ಅಲ್ಲಿ ಅವು ಯೆಹೋವನ ವಿಜಯದ ಬಗ್ಗೆ ಹೇಳು
ತ್ತವೆ. ಯೆಹೋವನ ಜನರು ಪಟ್ಟಣ ದ್ವಾರದಲ್ಲಿ
ಯುದ್ಧಕ್ಕೆ ಹೋದಾಗ ಇಸ್ರೇಲಿನಲ್ಲಿ ಅವರ
ವಿಜಯದ ಬಗ್ಗೆ ಹೇಳುತ್ತವೆ.
12 ಏಳು, ಏಳು ದೆಬೋರಳೇ! ಏಳು, ಎದ್ದೇಳು ಒಂದು
ಗೀತೆಯನ್ನು ಹಾಡು! ಬಾರಾಕನೇ, ಏಳು! ಅಬೀ
ನೋವಮನ ಮಗನೇ, ಹೋಗು; ನಿನ್ನ ಶತ್ರು
ಗಳನ್ನು ಸೆರೆ ಹಿಡಿದುಕೋ!
13 ಆಗ ಬದುಕಿಕೊಂಡಿದ್ದವರು ನಾಯಕರ ಬಳಿಗೆ
ಹೋದರು. ಯೆಹೋವನ ಜನರೇ,
ನನ್ನೊಂದಿಗೂ ಸೈನಿಕರೊಂದಿಗೂ ಬನ್ನಿರಿ.

---

**ಸೇಯೀರ್** ಎದೋಮ್ ಪ್ರದೇಶದ ಮತ್ತೊಂದು ಹೆಸರು.

**ಎದೋಮ್** ಈ ಪ್ರದೇಶವು ಇಸ್ರೇಲಿನ ದಕ್ಷಿಣ ಮತ್ತು ಪೂರ್ವಕ್ಕೆ ಇದೆ.

**ವ್ಯಾಪಾರಿಗಳು** ವ್ಯಾಪಾರಿಗಳ ಗುಂಪು. ಸುಮಾರಾಗಿ ವ್ಯಾಪಾರಿಗಳು ತಮ್ಮ ಕತ್ತೆಗಳ ಅಥವಾ ಒಂಟೆಗಳ ಮೇಲೆ ಸರಕುಗಳನ್ನು ಹೇರಿಕೊಂಡು ಒಂದು ಗುಂಪಿನಲ್ಲಿ ಪ್ರಯಾಣ ಮಾಡುತ್ತಿದ್ದರು.

14 ಅಮಾಲೇಕ್ ಪರ್ವತ* ಪ್ರದೇಶದಲ್ಲಿ ವಾಸ
ಮಾಡುತ್ತಿದ್ದ ಎಫ್ರಾಯೀಮ್ಯರು ಬಂದರು;
ನಿನ್ನನ್ನೂ ನಿನ್ನ ಜನರನ್ನೂ ಅನುಸರಿಸುತ್ತಿದ್ದ ಬೆನ್ಯಾ
ಮೀನ್ಯರೂ ಬಂದರು; ಮಾಕೀರನ ಕುಲದಿಂದ
ನಾಯಕರು ಬಂದರು; ಜೆಬುಲೂನ್ ಕುಲದಿಂದ
ನಾಯಕರು ಕಂಚಿನ ದೊಣ್ಣೆಗಳೊಡನೆ ಬಂದರು.
15 ಇಸ್ಸಾಕಾರ್ ಕುಲದ ನಾಯಕರು ದೆಬೋರಳ
ಜೊತೆಯಲ್ಲಿದ್ದರು. ಇಸ್ಸಾಕಾರ್ ಕುಲದವರು
ಬಾರಾಕನಿಗೆ ನಂಬಿಗಸ್ತರಾಗಿದ್ದರು. ಅವರು ಕಾಲು
ನಡಿಗೆಯಿಂದ ಕಣಿವೆಗೆ ಬಂದರು. ರೂಬೇನ್ಯರೇ,
ನಿಮ್ಮ ಸೈನ್ಯದಲ್ಲಿ ತುಂಬ ಶೂರರಿದ್ದಾರೆ.
16 ಹೀಗಿರಲು ನೀನು ಕುರಿಯ ಹಟ್ಟಿಗಳ ಗೋಡೆಗೆ
ಒರಗಿಕೊಂಡು ಕುಳಿತಿರುವುದೇಕೆ? ರೂಬೇನ್ಯರ
ಶೂರ ಸೈನಿಕರು ಯುದ್ಧದ ಬಗ್ಗೆ ಬಹಳವಾಗಿ
ಯೋಚಿಸಿದರು, ಆದರೆ ಕುರಿಗಳಿಗಾಗಿ ಬಾರಿಸುವ
ಸಂಗೀತವನ್ನು ಕೇಳುತ್ತಾ ಮನೆಯಲ್ಲಿ ಇದ್ದು
ಬಿಟ್ಟರು.

17 ‘‘ಗಿಲ್ಯಾದಿನ ಜನರು ಜೋರ್ಡನ್ ನದಿಯ ಆಚೆಯ
ದಡದಲ್ಲಿದ್ದ ತಮ್ಮ ಶಿಬಿರಗಳಲ್ಲಿ ಇದ್ದುಬಿಟ್ಟರು.*
ದಾನ್ ಕುಲದವರೇ, ನೀವೇಕೆ ನಿಮ್ಮ ಹಡಗು
ಗಳಲ್ಲಿಯೇ ಉಳಿದುಬಿಟ್ಟಿರಿ? ಆಶೇರ್ ಕುಲ
ದವರು ಸಮುದ್ರ ತೀರದಲ್ಲಿ ಉಳಿದರು; ಅವರು
ಸುರಕ್ಷಿತವಾದ ರೇವುಗಳಲ್ಲಿ ಬೀಡುಬಿಟ್ಟರು.
18 ಆದರೆ ಜೆಬುಲೂನ್ಯರೂ ನಫ್ತಾಲ್ಯರೂ ಆ ಬೆಟ್ಟಗಳ
ಮೇಲೆ ತಮ್ಮ ಜೀವವನ್ನೇ ಮುಡಿಪಾಗಿಟ್ಟು ಯುದ್ಧ
ಮಾಡಿದರು.
19 ಕಾನಾನ್ಯ ಅರಸರು ಬಂದು ಯುದ್ಧಮಾಡಿದರು;
ಅವರು ಮೆಗಿದ್ದೋ ಪ್ರವಾಹಗಳ ಬಳಿಯಲ್ಲಿರುವ
ತಾನಾಕದಲ್ಲಿ ಹೋರಾಡಿದರು. ಆದರೆ ಅವರು
ಯಾವ ಸಂಪತ್ತನ್ನು ತೆಗೆದುಕೊಂಡು ಹೋಗಲಿಲ್ಲ!
20 ಪರಲೋಕದಿಂದ ನಕ್ಷತ್ರಗಳು ಯುದ್ಧ ಮಾಡಿ
ದವು. ನಕ್ಷತ್ರಗಳು ಆಕಾಶ ಪಥದಿಂದ ಸೀಸೆರ
ನೊಡನೆ ಯುದ್ಧ ಮಾಡಿದವು.
21 ಪೂರ್ವಕಾಲದಿಂದ ಪ್ರಸಿದ್ಧವಾದ ಕೀಷೋನ್
ನದಿಯು ಸೀಸೆರನ ಜನರನ್ನು ಕೊಚ್ಚಿಕೊಂಡು
ಹೋಯಿತು. ನನ್ನ ಆತ್ಮವೇ, ಧೈರ್ಯದಿಂದ
ಮುನ್ನುಗ್ಗು!

22 ಸೀಸೆರನ ಬಲಿಷ್ಠವಾದ ಕುದುರೆಗಳು ಭರದಿಂದ
ಓಡಿದವು. ಆ ಕುದುರೆಗಳ ಕಾಲುಗಳು ನೆಲಕ್ಕೆ
ಅಪ್ಪಳಿಸಿದವು.

23 ‘‘ಮೇರೋಜ್ ಊರಿಗೆ ಶಾಪಹಾಕಿರಿ; ಅಲ್ಲಿಯ
ಜನರಿಗೆ ಶಾಪಹಾಕಿರಿ; ಏಕೆಂದರೆ ಅವರು
ಯೆಹೋವನ ಸಹಾಯಕ್ಕೆ ತಮ್ಮ ಸೈನ್ಯದೊಂದಿಗೆ
ಬರಲಿಲ್ಲ’’ ಎಂದನು ಯೆಹೋವನ ದೂತನು.
24 ಕೇನ್ಯನಾದ ಹೆಬೆರನ ಹೆಂಡತಿ ಯಾಯೇಲಳಿಗೆ
ಎಲ್ಲ ಹೆಂಗಸರಿಗಿಂತಲೂ ಹೆಚ್ಚಿಗೆ ದೇವರ
ಆಶೀರ್ವಾದವಾಗುವುದು.
25 ಸೀಸೆರನು ನೀರು ಕೇಳಿದನು; ಯಾಯೇಲಳು ಅವ
ನಿಗೆ ಹಾಲು ಕೊಟ್ಟಳು. ಅರಸನಿಗೆ ಯೋಗ್ಯವಾದ
ಬಟ್ಟಲಲ್ಲಿ ಅವಳು ಅವನಿಗೆ ಕೆನೆಯನ್ನು ತಂದಳು.
26 ನಂತರ ಯಾಯೇಲಳು ಕೈಚಾಚಿ ಗುಡಾರದ ಗೂಟ
ವನ್ನು ತೆಗೆದುಕೊಂಡಳು. ಅವಳು ಬಲಗೈಯನ್ನು
ಚಾಚಿ ದೊಡ್ಡ ಕೊಡತಿಯನ್ನು ತೆಗೆದುಕೊಂಡಳು,
ಆ ಕೊಡತಿಯಿಂದ ಸೀಸೆರನ ತಲೆಯನ್ನು ಬಿರು
ಸಾಗಿ ಒಡೆದು ಬಿಟ್ಟಳು; ಅವನ ಕಣತಲೆಗೆ ತಿವಿದು
ಬಡಿದಳು.

27 ‘‘ಯಾಯೇಲಳ ಪಾದಗಳ ಬಳಿಯಲ್ಲಿ ಬಗ್ಗಿಕೊಂಡು
ಉರುಳಿಬಿದ್ದನು; ಅವನು ಅವಳ ಪಾದಗಳ ಬಳಿ
ಯಲ್ಲಿ ಕುಸಿದುಬಿದ್ದನು. ಸೀಸೆರನು ಕುಸಿದು
ಬಿದ್ದಲ್ಲಿಯೇ ಸತ್ತನು.
28 ಸೀಸೆರನ ತಾಯಿ ಕಿಟಕಿಯ ಮೂಲಕ ನೋಡಿ
ದಳು; ಆಕೆಯು ತೆರೆಯ ಮೂಲಕ ನೋಡಿ ಕೂಗಿ
ದಳು. ‘‘ಸೀಸೆರನ ರಥಾಗಮನಕ್ಕೆ ಇಷ್ಟು ತಡವೇಕೆ?
ಅವನ ರಥದ ಕುದುರೆಗಳ ಧ್ವನಿ ಬರಲು ಇಷ್ಟು
ತಡವೇಕೆ?’’
29 ಅವಳ ಸೇವಕಿಯರಲ್ಲಿ ಅತಿಬುದ್ಧಿವಂತಳು ಹೀಗೆ
ಉತ್ತರಿಸಿದಳು. ಹೌದು, ಸೇವಕಿಯು
ಉತ್ತರಿಸಿದಳು,

30 ‘‘ಖಂಡಿತವಾಗಿ ಅವರು ಗೆದ್ದಿದ್ದಾರೆ, ತಾವು
ಸೋಲಿಸಿದ ಜನರಿಂದ ವಸ್ತುಗಳನ್ನು ಪಡೆಯುತ್ತಿ
ದ್ದಾರೆ! ಆ ವಸ್ತುಗಳನ್ನು ತಮ್ಮಲ್ಲಿಯೇ ಹಂಚಿ
ಕೊಳ್ಳುತ್ತಿದ್ದಾರೆ! ಪ್ರತಿಯೊಬ್ಬ ಸೈನಿಕನು ಒಬ್ಬಿಬ್ಬರು
ಹುಡುಗಿಯರನ್ನು ತೆಗೆದು ಕೊಳ್ಳುತ್ತಿರಬೇಕು.
ಸೀಸೆರನು ವರ್ಣರಂಜಿತ ಬಟ್ಟೆಯನ್ನು ತೆಗೆದು
ಕೊಳ್ಳುತ್ತಿರಬಹುದು. ಹೌದು! ವಿಜಯಿ ಸೀಸೆರನು
ಧರಿಸಲು ಬಣ್ಣಬಣ್ಣದ ಒಂದು ಬಟ್ಟೆಯನ್ನು

---

**ಅಮಾಲೇಕ್ ಪರ್ವತ** ಎಫ್ರಾಯೀಮ್ಯರು ನೆಲೆಸಿದ ಪ್ರದೇಶದ ಭಾಗ.

**ರೂಬೇನ್ಯರ ... ಬಿಟ್ಟರು** ಈ ಗೀತೆ ರೂಬೇನ್ಯರನ್ನು ತಮಾಷೆ ಮಾಡುತ್ತದೆ.

ತೆಗೆದು ಕೊಳ್ಳುತ್ತಿರಬಹುದು; ಅಥವಾ ಎರಡು
ಬಟ್ಟೆಗಳನ್ನು ತೆಗೆದುಕೊಳ್ಳುತ್ತಿರಬಹುದು.''
31 ಯೆಹೋವನೇ, ನಿನ್ನ ವೈರಿಗಳೆಲ್ಲಾ ಹೀಗೇ ಸಾಯಲಿ;
ಆದರೆ ನಿನ್ನನ್ನು ಪ್ರೀತಿಸುವವರೆಲ್ಲರೂ ಬಲ
ವಾಗಿದ್ದು ಉದಯಿಸುವ ಸೂರ್ಯನಂತೆ ಬೆಳಗಲಿ!
ನಲವತ್ತು ವರುಷಗಳವರೆಗೆ ದೇಶದಲ್ಲಿ ಶಾಂತಿ
ನೆಲೆಸಿತ್ತು.

## ಇಸ್ರೇಲರ ಜೊತೆ ಮಿದ್ಯಾನ್ಯರ ಯುದ್ಧ

6 ಇಸ್ರೇಲರು ಯೆಹೋವನಿಗೆ ವಿರೋಧವಾಗಿ ಮತ್ತೆ
ದುಷ್ಕೃತ್ಯಗಳನ್ನೇ ಮಾಡಿದರು. ಆದ್ದರಿಂದ
ಮಿದ್ಯಾನ್ಯರು ಇಸ್ರೇಲರ ಮೇಲೆ ಏಳು ವರ್ಷ ಪ್ರಭುತ್ವ
ನಡೆಸುವಂತೆ ಯೆಹೋವನು ಆಸ್ಪದ ಮಾಡಿದನು.
2 ಮಿದ್ಯಾನ್ಯರು ಬಹಳ ಬಲಶಾಲಿಗಳಾಗಿದ್ದು ಇಸ್ರೇಲ
ರಿಗೆ ಕ್ರೂರಿಗಳಾಗಿದ್ದರು. ಆದುದರಿಂದ ಇಸ್ರೇಲರು
ಅಡಗಿಕೊಳ್ಳುವುದಕ್ಕಾಗಿ ಬೆಟ್ಟಗಳಲ್ಲಿ ಸ್ಥಳಗಳನ್ನು ಮಾಡಿ
ಕೊಂಡರು. ಕಂಡುಹಿಡಿಯಲಾಗದ ಸ್ಥಳಗಳಲ್ಲಿ ಅವರು
ತಮ್ಮ ಆಹಾರವನ್ನು ಬಚ್ಚಿಡುತ್ತಿದ್ದರು. 3 ಪೂರ್ವದಿಂದ
ಮಿದ್ಯಾನ್ಯರೂ ಅಮಾಲೇಕ್ಯರೂ ಯಾವಾಗಲೂ ಬಂದು
ಇವರ ಬೆಳೆಗಳನ್ನು ನಾಶಪಡಿಸುತ್ತಿದ್ದರು. 4 ಅವರು ಈ
ಪ್ರದೇಶದಲ್ಲಿ ಪಾಳೆಯಮಾಡಿಕೊಂಡು ಇಸ್ರೇಲರ ಬೆಳೆ
ಗಳನ್ನು ನಾಶಪಡಿಸುತ್ತಿದ್ದರು. ಅವರು ಗಾಜಾ ನಗರದವ
ರೆಗಿರುವ ಪ್ರದೇಶದಲ್ಲಿನ ಬೆಳೆಗಳನ್ನು ಹಾಳುಮಾಡಿದರು.
ಅವರು ಇಸ್ರೇಲರ ಆಹಾರಕ್ಕಾಗಿ ಏನೂ ಉಳಿಸಲಿಲ್ಲ.
ಅವರು ಕುರಿ, ದನ, ಕತ್ತೆಗಳನ್ನು ಸಹ ಉಳಿಸಲಿಲ್ಲ.
5 ಮಿದ್ಯಾನ್ಯರು ಬಂದು ಈ ಪ್ರದೇಶದಲ್ಲಿ ಪಾಳೆಯ ಮಾಡಿ
ಕೊಂಡರು. ಅವರು ತಮ್ಮ ಸಂಗಡ ತಮ್ಮ ಕುಟುಂಬದ
ವರನ್ನೂ ಪಶುಗಳನ್ನೂ ತಂದರು. ಅವರು ಮಿಡತೆಗಳ
ಗುಂಪಿನಂತೆ ಅಸಂಖ್ಯರಾಗಿದ್ದರು. ಅವರು ಮತ್ತು ಅವರ
ಒಂಟೆಗಳು ಅತಿದೊಡ್ಡ ಪ್ರಮಾಣದಲ್ಲಿದ್ದು ಎಣಿಸಲು
ಸಾಧ್ಯವಿರಲಿಲ್ಲ. ಇವರೆಲ್ಲರೂ ಇಸ್ರೇಲರ ಪ್ರದೇಶಕ್ಕೆ ನುಗ್ಗಿ
ಹಾಳುಮಾಡಿದರು. 6 ಇಸ್ರೇಲರು ಮಿದ್ಯಾನ್ಯರಿಂದಾಗಿ
ತುಂಬ ಬಡವರಾಗಿಬಿಟ್ಟರು. ಆದುದರಿಂದ ಇಸ್ರೇಲರು
ಸಹಾಯಕ್ಕಾಗಿ ಯೆಹೋವನಿಗೆ ಮೊರೆಯಿಟ್ಟರು.
7 ಮಿದ್ಯಾನ್ಯರು ಕೆಟ್ಟದ್ದನ್ನೆಲ್ಲಾ ಮಾಡಿದರು. ಅದಕ್ಕಾಗಿ
ಇಸ್ರೇಲರು ಸಹಾಯಕೋರಿ ಯೆಹೋವನಲ್ಲಿ ಮೊರೆ
ಯಿಟ್ಟರು. 8 ಆದುದರಿಂದ ಯೆಹೋವನು ಅವರ ಹತ್ತಿ
ರಕ್ಕೆ ಒಬ್ಬ ಪ್ರವಾದಿಯನ್ನು ಕಳುಹಿಸಿದನು. ಆ
ಪ್ರವಾದಿಯು ಇಸ್ರೇಲರಿಗೆ ಹೀಗೆ ಹೇಳಿದನು:
''ಇಸ್ರೇಲರ ದೇವರಾದ ಯೆಹೋವನು ಇಂತೆನ್ನು
ತ್ತಾನೆ: 'ನೀವು ಈಜಿಪ್ಟಿನಲ್ಲಿ ಗುಲಾಮರಾಗಿದ್ದಿರಿ. ನಾನು
ನಿಮ್ಮನ್ನು ಸ್ವತಂತ್ರರನ್ನಾಗಿ ಮಾಡಿ ಅಲ್ಲಿಂದ ಹೊರಗೆ
ತಂದೆನು. 9 ನಾನು ನಿಮ್ಮನ್ನು ಬಲಶಾಲಿಗಳಾದ ಈಜಿಪ್ಟಿನ
ಜನರಿಂದ ರಕ್ಷಿಸಿದೆ. ತರುವಾಯ ಕಾನಾನ್ಯರು ನಿಮ್ಮನ್ನು
ಪೀಡಿಸಿದರು. ಆಗ ಮತ್ತೊಮ್ಮೆ ನಾನು ನಿಮ್ಮನ್ನು ರಕ್ಷಿಸಿದೆ.
ನಾನು ಅವರನ್ನು ಅವರ ಪ್ರದೇಶದಿಂದ ಓಡಿಸಿ ಅದನ್ನು
ನಿಮಗೆ ಕೊಟ್ಟೆ.' 10 ಆಗ ನಾನು ನಿಮಗೆ, 'ಯೆಹೋವ
ನಾದ ನಾನೇ ನಿಮ್ಮ ದೇವರು! ಅಮೋರಿಯರ ಪ್ರದೇಶ
ದಲ್ಲಿದ್ದರೂ ಅವರ ಸುಳ್ಳುದೇವರುಗಳನ್ನು ನೀವು ಪೂಜಿಸ
ಕೂಡದು ಎಂದು ಹೇಳಿದ್ದೆ.' ಆದರೆ ನೀವು ನನ್ನ ಮಾತನ್ನು
ಕೇಳಲಿಲ್ಲ.''*

## ಯೆಹೋವನ ದೂತನು ಗಿದ್ಯೋನನಿಗೆ ಪ್ರತ್ಯಕ್ಷನಾದನು

11 ''ಆ ಸಮಯದಲ್ಲಿ ಯೆಹೋವನ ದೂತನು
ಗಿದ್ಯೋನ ಎಂಬ ವ್ಯಕ್ತಿಯ ಬಳಿಗೆ ಬಂದನು.
ಯೆಹೋವನ ದೂತನು ಒಫ್ರ ಎಂಬ ಊರಲ್ಲಿ ಏಲಾ
ವೃಕ್ಷದ ಕೆಳಗೆ ಕುಳಿತುಕೊಂಡನು. ಆ ಗಿಡವು ಯೋವಾಷನ
ದಾಗಿತ್ತು. ಯೋವಾಷನು ಅಬೀಯೆಜೆರನ ಕುಲದವನಾಗಿ
ದ್ದನು. ಯೋವಾಷನು ಗಿದ್ಯೋನನ ತಂದೆ. ಗಿದ್ಯೋನನು
ದ್ರಾಕ್ಷಿಯ ಆಲೆಯ ಮರೆಯಲ್ಲಿ ಗೋಧಿಯನ್ನು ಬಡಿ
ಯುತ್ತಿದ್ದನು. ಯೆಹೋವನ ದೂತನು ಗಿದ್ಯೋನನ
ಹತ್ತಿರ ಕುಳಿತುಕೊಂಡನು. ಮಿದ್ಯಾನ್ಯರಿಗೆ ಗೋಧಿ ಕಾಣ
ಬಾರದೆಂದು ಗಿದ್ಯೋನನು ಮರೆಯಾಗಿದ್ದನು.
12 ಯೆಹೋವನ ದೂತನು ಗಿದ್ಯೋನನಿಗೆ ಪ್ರತ್ಯಕ್ಷನಾಗಿ,
''ಪರಾಕ್ರಮಶಾಲಿಯೇ, ದೇವರು ನಿನ್ನ ಸಂಗಡ
ಇದ್ದಾನೆ'' ಎಂದು ಹೇಳಿದನು.
13 ಆಗ ಗಿದ್ಯೋನನು, ''ಸ್ವಾಮೀ, ಯೆಹೋವನು ನಮ್ಮ
ಸಂಗಡವಿದ್ದರೆ ನಮಗೆ ಇಷ್ಟೊಂದು ಕಷ್ಟಗಳೇಕೆ ಬರು
ತ್ತವೆ? ನಮ್ಮ ಪೂರ್ವಿಕರಿಗಾಗಿ ಆತನು ಬಹಳಷ್ಟು ಅದ್ಭುತ
ಕಾರ್ಯಗಳನ್ನು ಮಾಡಿದ್ದನೆಂದು ನಾವು ಕೇಳಿದ್ದೇವೆ.
ಆತನು ಅವರನ್ನು ಈಜಿಪ್ಟಿನಿಂದ ಹೊರಗೆ ಕರೆ ತಂದ
ನೆಂದು ನಮ್ಮ ಪೂರ್ವಿಕರು ನಮಗೆ ಹೇಳಿದರು. ಆದರೆ
ಈಗ ಯೆಹೋವನು ನಮ್ಮ ಕೈಬಿಟ್ಟಿದ್ದಾನೆ; ಮಿದ್ಯಾನ್ಯರು
ನಮ್ಮನ್ನು ಸೋಲಿಸುವಂತೆ ಮಾಡಿದ್ದಾನೆ'' ಎಂದು
ಹೇಳಿದನು.
14 ಯೆಹೋವನು ಗಿದ್ಯೋನನ ಕಡೆಗೆ ತಿರುಗಿ, ''ನಿನ್ನ
ಬಲವನ್ನು ಉಪಯೋಗಿಸು. ಹೋಗು, ಮಿದ್ಯಾನ್ಯರಿಂದ
ಇಸ್ರೇಲರನ್ನು ರಕ್ಷಿಸು. ನಾನು ಅವರನ್ನು ರಕ್ಷಿಸುವುದಕ್ಕಾಗಿ
ನಿನ್ನನ್ನು ಕಳುಹಿಸುತ್ತಿದ್ದೇನೆ'' ಅಂದನು.
15 ಅದಕ್ಕೆ ಗಿದ್ಯೋನನು, ''ಕರ್ತನೇ, ಮನಸ್ಸೆಕುಲದಲ್ಲಿ
ನನ್ನ ಕುಟುಂಬವು ಕೇವಲ ಅಲ್ಪವಾದದ್ದು. ನನ್ನ ಕುಟುಂಬ
ದಲ್ಲಿ ನಾನು ಎಲ್ಲರಿಗಿಂತ ಚಿಕ್ಕವನು. ನಾನು ಇಸ್ರೇಲರನ್ನು
ರಕ್ಷಿಸಲು ಹೇಗೆ ಸಾಧ್ಯ?'' ಎಂದು ಕೇಳಿದನು.

---

**ವಚನಗಳು 7-10** ಈ ವಚನಗಳು ಅತಿ ಪ್ರಾಚೀನವಾದ ಹೀಬ್ರೂ ಗ್ರಂಥದಲ್ಲಿ ಸಿಕ್ಕುವುದಿಲ್ಲ.

16ಯೆಹೋವನು ಗಿದ್ಯೋನನಿಗೆ, ‘‘ನಾನು ನಿನ್ನ ಸಂಗಡವಿದ್ದೇನೆ! ಆದುದರಿಂದ ನೀನು ಮಿದ್ಯಾನ್ಯರನ್ನು ಸೋಲಿಸುವೆ. ಕೇವಲ ಒಬ್ಬನೊಂದಿಗೆ ಯುದ್ಧ ಮಾಡುತ್ತಿರುವಿಯೋ ಎಂಬಂತೆ ನಿನಗೆ ಅನಿಸುತ್ತದೆ’’ ಎಂದು ಹೇಳಿದನು.

17ಆಗ ಗಿದ್ಯೋನನು ಯೆಹೋವನಿಗೆ, ‘‘ನೀನು ನನಗೆ ಕೃಪೆತೋರಿದರೆ, ನೀನು ನಿಜವಾಗಿಯೂ ಯೆಹೋವನು ಎಂಬುದಕ್ಕೆ ನನಗೆ ಒಂದು ಗುರುತನ್ನು ಕೊಡು. 18ದಯವಿಟ್ಟು ಇಲ್ಲಿಯೇ ಇರು. ನಾನು ಬರುವವರೆಗೆ ಎಲ್ಲಿಗೂ ಹೋಗಬೇಡ. ನಾನು ನಿನಗೆ ಕಾಣಿಕೆಯನ್ನು ತಂದು ಅರ್ಪಿಸುವುದಕ್ಕೆ ಅವಕಾಶ ಕೊಡು’’ ಎಂದು ಪ್ರಾರ್ಥಿಸಿದನು. ಅದಕ್ಕೆ, ಆತನು, ‘‘ನೀನು ಬರುವವರೆಗೂ ನಾನು ಇರುತ್ತೇನೆ’’ ಎಂದು ಹೇಳಿದನು.

19ಗಿದ್ಯೋನನು ಒಳಗೆ ಹೋಗಿ ಒಂದು ಆಡಿನ ಮರಿಯನ್ನು ಬೇಯಿಸಿದನು. ಅವನು ಸುಮಾರು ಇಪ್ಪತ್ತು ಸೇರಿನಷ್ಟು ಹಿಟ್ಟನ್ನು ತೆಗೆದುಕೊಂಡು ಹುಳಿಯಿಲ್ಲದ ರೊಟ್ಟಿಯನ್ನು ಮಾಡಿದನು. ತರುವಾಯ ಗಿದ್ಯೋನನು ಆ ಮಾಂಸವನ್ನು ಒಂದು ಬುಟ್ಟಿಯಲ್ಲಿಟ್ಟನು, ಮಾಂಸ ಬೇಯಿಸಿದ ನೀರನ್ನು ಒಂದು ಪಾತ್ರೆಯಲ್ಲಿ ಹಾಕಿದನು. ಗಿದ್ಯೋನನು ಆ ಮಾಂಸವನ್ನೂ ಮಾಂಸಬೇಯಿಸಿದ ನೀರನ್ನೂ ಹುಳಿಯಿಲ್ಲದ ರೊಟ್ಟಿಯನ್ನೂ ತೆಗೆದುಕೊಂಡು ಬಂದನು. ಗಿದ್ಯೋನನು ಏಲಾ ಮರದ ಕೆಳಗೆ ಯೆಹೋವನಿಗೆ ಆಹಾರವನ್ನು ಕೊಟ್ಟನು.

20ದೇವದೂತನು ಗಿದ್ಯೋನನಿಗೆ, ‘‘ಆ ಮಾಂಸವನ್ನೂ ಹುಳಿಯಿಲ್ಲದ ಆ ರೊಟ್ಟಿಯನ್ನೂ ಆ ಕಲ್ಲಿನ ಮೇಲೆ ಇಡು. ಆಮೇಲೆ ಆ ನೀರನ್ನು ಅದರ ಮೇಲೆ ಸುರಿ’’ ಎಂದನು. ದೇವದೂತನು ಹೇಳಿದಂತೆಯೇ ಗಿದ್ಯೋನನು ಮಾಡಿದನು.

21ಯೆಹೋವನ ದೂತನ ಕೈಯಲ್ಲಿ ಒಂದು ಕೋಲಿತ್ತು. ಯೆಹೋವನ ದೂತನು ತನ್ನ ಕೋಲಿನ ತುದಿಯಿಂದ ಮಾಂಸವನ್ನು ಮತ್ತು ರೊಟ್ಟಿಯನ್ನು ಮುಟ್ಟಿದನು. ಆಗ ಆ ಕಲ್ಲಿನಿಂದ ಬೆಂಕಿಯ ಜ್ವಾಲೆಯು ಎದ್ದಿತು! ಮಾಂಸ ಮತ್ತು ರೊಟ್ಟಿ ಸಂಪೂರ್ಣವಾಗಿ ಸುಟ್ಟುಹೋದವು! ಆಮೇಲೆ ಯೆಹೋವನ ದೂತನು ಅದೃಶ್ಯನಾದನು.

22ತಾನು ಈವರೆಗೆ ಮಾತಾಡುತ್ತಿದ್ದದ್ದು ಯೆಹೋವನ ದೂತನೊಡನೆ ಎಂಬುದು ಗಿದ್ಯೋನನಿಗೆ ಆಗ ಅರಿವಾಯಿತು. ಗಿದ್ಯೋನನು, ‘‘ಸರ್ವಶಕ್ತನಾದ ಯೆಹೋವನೇ, ನಿನ್ನ ದೂತನನ್ನು ಮುಖಾಮುಖಿಯಾಗಿ ಕಂಡೆನು’’ ಎಂದು ಕೂಗಿಕೊಂಡನು.

23‘‘ಶಾಂತನಾಗು, ಭಯಪಡಬೇಡ, ನೀನು ಸಾಯುವುದಿಲ್ಲ’’ ಎಂದು ಗಿದ್ಯೋನನಿಗೆ ಯೆಹೋವನು ಹೇಳಿದನು.

24ಗಿದ್ಯೋನನು ದೇವರನ್ನು ಆರಾಧಿಸಲು ಆ ಸ್ಥಳದಲ್ಲಿ ಒಂದು ಯಜ್ಞವೇದಿಕೆಯನ್ನು ಕಟ್ಟಿದನು. ಗಿದ್ಯೋನನು ಅದಕ್ಕೆ ‘‘ಯೆಹೋವನು ಶಾಂತಿ ಸ್ವರೂಪನು’’ ಎಂದು ಹೆಸರಿಟ್ಟನು. ಆ ಯಜ್ಞವೇದಿಕೆಯು ಇಂದಿಗೂ ಅಬೀಯೆಜೆರ್ ಕುಲದವರು ವಾಸಿಸುವ ಒಫ್ರದಲ್ಲಿದೆ.

## ಗಿದ್ಯೋನನು ಬಾಳನ ಯಜ್ಞವೇದಿಕೆಯನ್ನು ಕೆಡವಿದನು

25ಅದೇ ರಾತ್ರಿ ಯೆಹೋವನು ಗಿದ್ಯೋನನೊಂದಿಗೆ ಮಾತನಾಡಿ, ‘‘ನಿನ್ನ ತಂದೆಯ ಹೋರಿಗಳಲ್ಲಿ ಏಳು ವರ್ಷದ ಹೋರಿಯನ್ನು ತೆಗೆದುಕೊಂಡು ಹೋಗಿ ನಿನ್ನ ತಂದೆಯು ಸುಳ್ಳುದೇವರಾದ ಬಾಳನಿಗೆ ಕಟ್ಟಿರುವ ಯಜ್ಞವೇದಿಕೆಯನ್ನು ಕೆಡವಿಬಿಡು; ಅದರ ಬಳಿಯಲ್ಲಿರುವ ಅಶೇರ ಎಂಬ ವಿಗ್ರಹಸ್ತಂಭವನ್ನು ಕಡಿದುಹಾಕು.

26ಬಳಿಕ ನಿಮ್ಮ ದೇವರಾದ ಯೆಹೋವನಿಗಾಗಿ ಸರಿಯಾದ ಯಜ್ಞವೇದಿಕೆಯನ್ನು ಈ ಗುಡ್ಡದ ಶಿಖರದಲ್ಲಿ ಕಟ್ಟಿಸು. ಆಮೇಲೆ ಆ ಹೋರಿಯನ್ನು ಈ ಯಜ್ಞವೇದಿಕೆಯ ಮೇಲೆ ಸರ್ವಾಂಗಹೋಮವಾಗಿ ಅರ್ಪಿಸು; ಅಶೇರ ಸ್ತಂಭದ ಕಟ್ಟಿಗೆಯನ್ನು ಈ ಸರ್ವಾಂಗಹೋಮಕ್ಕೆ ಉಪಯೋಗಿಸು’’ ಎಂದು ಹೇಳಿದನು.

27ಗಿದ್ಯೋನನು ತನ್ನ ಸೇವಕರಲ್ಲಿ ಹತ್ತು ಮಂದಿಯನ್ನು ಕರೆದುಕೊಂಡು ಹೋಗಿ ಯೆಹೋವನು ಹೇಳಿದಂತೆಯೇ ಮಾಡಿದನು. ಆದರೆ ಅವನು ತನ್ನ ಕುಟುಂಬದವರಿಗೂ ನಗರನಿವಾಸಿಗಳಿಗೂ ಹೆದರಿಕೊಂಡಿದ್ದರಿಂದ ಅವನು ಅದನ್ನು ಹಗಲಿನಲ್ಲಿ ಮಾಡದೆ ರಾತ್ರಿಯಲ್ಲಿ ಮಾಡಿದನು.

28ನಗರದ ಜನರು ಮರುದಿನ ಬೆಳಿಗ್ಗೆ ಎದ್ದಾಗ ಬಾಳನ ಯಜ್ಞವೇದಿಕೆಯು ಕೆಡವಲ್ಪಟ್ಟಿರುವುದನ್ನೂ ಅಶೇರ ಸ್ತಂಭವು ಕಡಿದುಹಾಕಲ್ಪಟ್ಟಿರುವುದನ್ನೂ ನೋಡಿದರು. ಅಶೇರಸ್ತಂಭವು ಬಾಳನ ಯಜ್ಞವೇದಿಕೆಯ ಪಕ್ಕದಲ್ಲಿತ್ತು. ಗಿದ್ಯೋನನು ಕಟ್ಟಿದ್ದ ಯಜ್ಞವೇದಿಕೆಯನ್ನು ಸಹ ಅವರು ನೋಡಿದರು. ಯಜ್ಞವೇದಿಕೆಯ ಮೇಲೆ ಹೋರಿಯನ್ನು ಸರ್ವಾಂಗಹೋಮವಾಗಿ ಅರ್ಪಿಸಿರುವುದನ್ನೂ ಅವರು ನೋಡಿದರು.

29ನಗರದ ಜನರು ಒಬ್ಬರಿಗೊಬ್ಬರು, ‘‘ನಮ್ಮ ಯಜ್ಞವೇದಿಕೆಯನ್ನು ಯಾರು ಕೆಡವಿದರು? ನಮ್ಮ ಅಶೇರ ಸ್ತಂಭವನ್ನು ಯಾರು ಕಡಿದುಹಾಕಿದರು? ಈ ಹೊಸ ಯಜ್ಞವೇದಿಕೆಯ ಮೇಲೆ ಈ ಹೋರಿಯನ್ನು ಯಾರು ಸರ್ವಾಂಗಹೋಮ ಮಾಡಿದರು?’’ ಎಂಬ ಹಲವಾರು ಪ್ರಶ್ನೆಗಳನ್ನು ಕೇಳಿ ಇದೆಲ್ಲವನ್ನು ಮಾಡಿದವರು ಯಾರೆಂದು ತಿಳಿದುಕೊಳ್ಳುವ ಪ್ರಯತ್ನ ಮಾಡಿದರು.

‘‘ಯೋವಾಷನ ಮಗನಾದ ಗಿದ್ಯೋನನು ಇದನ್ನೆಲ್ಲ ಮಾಡಿದನು’’ ಎಂದು ಯಾರೋ ಹೇಳಿದರು.

30ನಗರದ ಜನರು ಯೋವಾಷನಲ್ಲಿಗೆ ಬಂದು ಯೋವಾಷನಿಗೆ, ‘‘ನೀನು ನಿನ್ನ ಮಗನನ್ನು ಹೊರಗೆ ಕರೆದುಕೊಂಡು ಬಾ. ಅವನು ಬಾಳನ

ಯಜ್ಞವೇದಿಕೆಯನ್ನು ಕೆಡವಿದ್ದಾನೆ. ಆ ಯಜ್ಞವೇದಿಕೆಯ
ಪಕ್ಕದಲ್ಲಿದ್ದ ಅಶೇರಸ್ತಂಭವನ್ನು ಕಡಿದುಹಾಕಿದ್ದಾನೆ.
ಅವನನ್ನು ನಾವು ಕೊಂದುಬಿಡುತ್ತೇವೆ'' ಅಂದರು.
31ತನ್ನ ಸುತ್ತಲೂ ನಿಂತಿದ್ದ ಜನರಿಗೆ ಯೋವಾಷನು,
''ನೀವು ಬಾಳನ ಪಕ್ಷವನ್ನು ವಹಿಸುವಿರಾ? ನೀವು ಬಾಳ
ನನ್ನು ರಕ್ಷಿಸುವಿರಾ? ಬಾಳನ ಪಕ್ಷದವರನ್ನು ಬೆಳಗಾಗು
ವುದರೊಳಗೆ ಕೊಂದುಬಿಡಲಾಗುವುದು. ಬಾಳನು
ನಿಜವಾಗಿಯೂ ದೇವರಾಗಿದ್ದರೆ ಅವನ ಯಜ್ಞವೇದಿಕೆ
ಯನ್ನು ಬೀಳಿಸುವಾಗ ಅವನು ತನ್ನ ರಕ್ಷಣೆಯನ್ನು ಏಕೆ
ಮಾಡಿಕೊಳ್ಳಲಿಲ್ಲ.'' ಅಂದನು. 32ಯೋವಾಷನು,
''ಗಿದ್ಯೋನನು ಬಾಳನ ಯಜ್ಞವೇದಿಕೆಯನ್ನು ಕೆಡವಿದ
ಪಕ್ಷದಲ್ಲಿ ಬಾಳನು ಅವನೊಡನೆ ವಾದಿಸಲಿ'' ಎಂದು
ಹೇಳಿದನು. ಅಂದು ಯೋವಾಷನು ಗಿದ್ಯೋನನಿಗೆ
ಯೆರುಬ್ಬಾಳ* ಎಂಬ ಹೊಸ ಹೆಸರನ್ನು ಕೊಟ್ಟನು.

### ಮಿದ್ಯಾನ್ಯರನ್ನು ಗಿದ್ಯೋನನು ಸೋಲಿಸಿದನು

33ಮಿದ್ಯಾನ್ಯರು, ಅಮಾಲೇಕ್ಯರು ಮತ್ತು ಪೂರ್ವ
ದೇಶದ ಕೆಲವರು ಇಸ್ರೇಲರ ಮೇಲೆ ಯುದ್ಧಮಾಡಲು
ಒಟ್ಟುಗೂಡಿದರು. ಅವರು ಜೋರ್ಡನ್ ನದಿಯನ್ನು
ದಾಟಿಹೋಗಿ ಇಜ್ರೇಲಿನ ತಗ್ಗಿನಲ್ಲಿ ಪಾಳೆಯ ಮಾಡಿ
ಕೊಂಡರು. 34ಗಿದ್ಯೋನನ ಮೇಲೆ ಯೆಹೋವನ ಆತ್ಮವು
ಬಂದಿತು; ಅವನಿಗೆ ಹೆಚ್ಚಿನ ಶಕ್ತಿಯನ್ನು ಕೊಟ್ಟಿತು.
ಅಬೀಯೇಜರನ ಗೋತ್ರದವರನ್ನು ತನ್ನನ್ನು ಹಿಂಬಾಲಿ
ಸಲು ಕರೆಯುವುದಕ್ಕಾಗಿ ಗಿದ್ಯೋನನು ತುತ್ತೂರಿಯನ್ನು
ಊದಿದನು. 35ಮನಸ್ಸೆಕುಲದ ಜನರೆಲ್ಲರನ್ನು ಕರೆಯುವು
ದಕ್ಕಾಗಿ ಗಿದ್ಯೋನನು ದೂತರನ್ನು ಕಳುಹಿಸಿದನು. ಆ
ದೂತರು ಮನಸ್ಸೆಕುಲದ ಜನರಿಗೆ ತಮ್ಮ ಆಯುಧಗಳನ್ನು
ತೆಗೆದುಕೊಂಡು ಯುದ್ಧಕ್ಕೆ ಸಿದ್ಧರಾಗಬೇಕೆಂದು ತಿಳಿಸಿ
ದರು. ಗಿದ್ಯೋನನು ಅಶೇರ್, ಜೆಬುಲೂನ್ ಮತ್ತು
ನಫ್ತಾಲಿ ಕುಲದವರ ಹತ್ತಿರವೂ ಸಹ ದೂತರನ್ನು ಕಳು
ಹಿಸಿದನು. ಆ ದೂತರು ಸಹ ಅದೇ ಸಂದೇಶವನ್ನು ತಿಳಿಸಿ
ದರು. ಆದುದರಿಂದ ಆ ಕುಲಗಳವರು ಸಹ ಗಿದ್ಯೋನ
ನನ್ನು ಮತ್ತು ಅವನ ಜನರನ್ನು ಸೇರಿಕೊಳ್ಳಲು ಹೋದರು.
36ಆಗ ಗಿದ್ಯೋನನು ಯೆಹೋವನಿಗೆ, ''ಇಸ್ರೇಲಿನ
ಜನರನ್ನು ರಕ್ಷಿಸಲು ನೀನು ನನಗೆ ಸಹಾಯ ಮಾಡುವ
ದಾಗಿ ಹೇಳಿರುವೆ. ಅದಕ್ಕೆ ಸಾಕ್ಷ್ಯವನ್ನು ಈಗ ಒದಗಿಸು.
37ನಾನು ಕಣದಲ್ಲಿ ಕುರಿಯ ತುಪ್ಪಟವನ್ನು ಹಾಸುತ್ತೇನೆ.
ನೆಲವೆಲ್ಲ ಒಣಗಿದ್ದು ಕೇವಲ ಕುರಿಯ ತುಪ್ಪಟದ ಮೇಲೆ
ಇಬ್ಬನಿ ಬಿದ್ದರೆ, ನೀನು ಹೇಳಿದಂತೆಯೇ ಇಸ್ರೇಲನ್ನು
ರಕ್ಷಿಸಲು ನನ್ನನ್ನು ಬಳಸುವೆ ಎಂದು ಅರಿತುಕೊಳ್ಳುವೆ''
ಅಂದನು. 38ಹಾಗೆಯೇ ಆಯಿತು. ಗಿದ್ಯೋನನು
ಮರುದಿನ ಬೆಳಿಗ್ಗೆ ಬೇಗ ಎದ್ದು ಕುರಿಯ ತುಪ್ಪಟವನ್ನು
ಹಿಂಡಿದನು. ಆ ಕುರಿಯ ತುಪ್ಪಟದಿಂದ ಒಂದು ಬಟ್ಟಲು
ತುಂಬ ನೀರು ಬಂದಿತು.
39ಆಗ ಗಿದ್ಯೋನನು ಯೆಹೋವನಿಗೆ, ''ನನ್ನ ಮೇಲೆ
ಕೋಪಿಸಿಕೊಳ್ಳಬೇಡ. ನಾನು ಇನ್ನೊಂದು ಸಾಕ್ಷ್ಯವನ್ನು
ಕೇಳುತ್ತೇನೆ. ಇನ್ನೊಂದು ಸಲ ಕುರಿಯ ತುಪ್ಪಟದಿಂದ
ನಿನ್ನನ್ನು ಪರೀಕ್ಷಿಸುತ್ತೇನೆ. ಈ ಸಲ, ಸುತ್ತಮುತ್ತಲಿನ
ಭೂಮಿಯು ಮಂಜಿನಿಂದ ಹಸಿಯಾಗಿ, ಕುರಿಯ ತುಪ್ಪಟ
ಮಾತ್ರ ಒಣಗಿರಲಿ'' ಎಂದು ಪ್ರಾರ್ಥಿಸಿದನು.
40ಆ ರಾತ್ರಿ ದೇವರು ಹಾಗೆಯೇ ಮಾಡಿದನು. ಕೇವಲ
ಕುರಿಯ ತುಪ್ಪಟ ಮಾತ್ರ ಒಣಗಿದಂತಿದ್ದು ಸುತ್ತಲಿರುವ
ನೆಲವೆಲ್ಲಾ ಮಂಜಿನ ನೀರಿನಿಂದ ಹಸಿಯಾಗಿತ್ತು.

7 ಬೆಳಗಿನ ಜಾವ ಯೆರುಬ್ಬಾಳನು (ಗಿದ್ಯೋನನು)
ಮತ್ತು ಅವನ ಎಲ್ಲಾ ಜನರು ಹೋಗಿ ಹರೋದಿನ
ಬುಗ್ಗೆಯ ಬಳಿಯಲ್ಲಿ ಪಾಳೆಯ ಮಾಡಿಕೊಂಡರು.
ಮಿದ್ಯಾನ್ಯರು ಮೋರೆ ಎಂಬ ಬೆಟ್ಟದ ತಗ್ಗಿನಲ್ಲಿ ಪಾಳೆಯ
ಮಾಡಿಕೊಂಡರು. ಇದು ಗಿದ್ಯೋನ ಮತ್ತು ಅವನ ಜನರ
ಉತ್ತರಕ್ಕಿತ್ತು. 2ಆಗ ಯೆಹೋವನು ಗಿದ್ಯೋನನಿಗೆ,
''ನಾನು ಮಿದ್ಯಾನ್ಯರನ್ನು ಸೋಲಿಸಲು ನಿನ್ನ ಜನರಿಗೆ
ಸಹಾಯ ಮಾಡುತ್ತೇನೆ. ಆದರೆ ಈ ಕೆಲಸಕ್ಕೆ ನಿನ್ನ ಜನರು
ತುಂಬ ಹೆಚ್ಚು. ಇಸ್ರೇಲರು ನನ್ನನ್ನು ಮರೆತು ತಾವೇ
ತಮ್ಮನ್ನು ರಕ್ಷಿಸಿಕೊಂಡೆವೆಂದು ಜಂಬಕೊಚ್ಚಿಕೊಳ್ಳು
ವುದು ನನಗೆ ಇಷ್ಟವಿಲ್ಲ. 3ಆದಕ್ಕಾಗಿ ಈಗ, ''ಭಯಪಡು
ವವರೆಲ್ಲರು ಗಿಲ್ಯಾದ್ ಬೆಟ್ಟವನ್ನು ಬಿಟ್ಟುಹೋಗ
ಬಹುದು' ಎಂದು ಪ್ರಕಟಿಸು'' ಎಂದು ಹೇಳಿದನು.
ಆ ಸಮಯದಲ್ಲಿ ಇಪ್ಪತ್ತೆರಡು ಸಾವಿರ ಜನರು
ಗಿದ್ಯೋನನನ್ನು ಬಿಟ್ಟು ಮನೆಗೆ ಹಿಂದಿರುಗಿದರು. ಆದರೆ
ಇನ್ನೂ ಹತ್ತು ಸಾವಿರ ಜನರು ಉಳಿದುಕೊಂಡರು.
4ಆಗ ಯೆಹೋವನು ಗಿದ್ಯೋನನಿಗೆ, ''ಇನ್ನೂ ಬಹ
ಳಷ್ಟು ಜನರಿದ್ದಾರೆ. ಇವರನ್ನು ನೀನು ನದಿಗೆ ಕರೆದು
ಕೊಂಡು ಹೋಗು. ಅಲ್ಲಿ ನಾನು ಅವರನ್ನು ನಿನಗಾಗಿ
ಪರೀಕ್ಷಿಸುತ್ತೇನೆ. 'ಯಾವನು ನಿನ್ನ ಜೊತೆಯಲ್ಲಿ ಹೋಗ
ಬಹುದು' ಎಂದು ನಾನು ಹೇಳುತ್ತೇನೋ ಅವನು
ಹೋಗಲಿ; 'ಯಾವನು ನಿನ್ನ ಜೊತೆಯಲ್ಲಿ ಹೋಗುವುದು
ಬೇಡ' ಎಂದು ನಾನು ಹೇಳುತ್ತೇನೋ ಅವನು ಹೋಗ
ದಿರಲಿ'' ಎಂದು ಹೇಳಿದನು.
5ಆದುದರಿಂದ ಗಿದ್ಯೋನನು ಅವರನ್ನು ನದಿಯ ಹತ್ತಿರ
ಕರೆದುಕೊಂಡು ಹೋದನು. ಅಲ್ಲಿ ಯೆಹೋವನು
ಗಿದ್ಯೋನನಿಗೆ, ''ನೀರನ್ನು ನಾಯಿಯಂತೆ ತಮ್ಮ ನಾಲಿಗೆ
ಯಿಂದ ನೆಕ್ಕಿ ಕುಡಿಯುವವರನ್ನು ಒಂದು ಗುಂಪನ್ನಾಗಿ

**ಯೆರುಬ್ಬಾಳ** ಇದು ಹೀಬ್ರೂ ಶಬ್ದಗಳಂತೆ ಇದೆ. ಇದರ ಅರ್ಥ ''ಬಾಳನು ವಾದಿಸಲಿ'' ಎಂದು, ಆ ಕ್ರಿಯಾ ಪದವನ್ನು ''ಒಂದು ಪಕ್ಷ ವಹಿಸು'' ''ರಕ್ಷಿಸು'' ಎಂದು ಅರ್ಥೈಸಲಾಗಿದೆ.

ಮತ್ತು ನೆಲಕ್ಕೆ ಮೊಣಕಾಲೂರಿ ನೀರನ್ನು ಕುಡಿಯುವ
ವರನ್ನು ಇನ್ನೊಂದು ಗುಂಪನ್ನಾಗಿ ವಿಂಗಡಿಸು'' ಎಂದು
ಹೇಳಿದನು.

6ಅವರಲ್ಲಿ ಮೂನ್ನೂರು ಮಂದಿ ಗಂಡಸರು ಕೈಯಿಂದ
ನೀರನ್ನು ಬಾಯಿಯವರೆಗೆ ತೆಗೆದುಕೊಂಡು ನಾಯಿ
ಯಂತೆ ನೆಕ್ಕಿದರು. ಉಳಿದವರೆಲ್ಲರು ಬಗ್ಗಿ ಮೊಣ
ಕಾಲೂರಿ ನೀರನ್ನು ಕುಡಿದರು. 7ಯೆಹೋವನು
ಗಿದ್ಯೋನನಿಗೆ, ''ನಾಯಿಯಂತೆ ನೀರನ್ನು ನೆಕ್ಕಿದ
ಮುನ್ನೂರು ಮಂದಿಯಿಂದಲೇ ಮಿದ್ಯಾನ್ಯರನ್ನು
ಸೋಲಿಸಿ ನಿಮ್ಮನ್ನು ರಕ್ಷಿಸುವೆನು. ಉಳಿದವರು ತಮ್ಮ
ಮನೆಗಳಿಗೆ ಹೋಗಲಿ'' ಎಂದು ಹೇಳಿದನು.

8ಗಿದ್ಯೋನನು ಉಳಿದ ಇಸ್ರೇಲರನ್ನು ಮನೆಗೆ ಕಳುಹಿಸಿ
ಆಯ್ಕೆಗೊಂಡ ಮುನ್ನೂರು ಜನರನ್ನು ಉಳಿಸಿಕೊಂಡನು.
ಆ ಮುನ್ನೂರು ಜನರು ಮನೆಗೆ ಹಿಂತಿರುಗಿಹೋದವರ
ಆಹಾರವನ್ನೂ ತುತ್ತೂರಿಗಳನ್ನೂ ತೆಗೆದುಕೊಂಡರು.
ಮಿದ್ಯಾನ್ಯರು ಗಿದ್ಯೋನನ ಪಾಳೆಯದ ಕೆಳಭಾಗದ
ತಗ್ಗಿನಲ್ಲಿ ಪಾಳೆಯಮಾಡಿಕೊಂಡಿದ್ದರು. 9ಅಂದು ರಾತ್ರಿ
ಯೆಹೋವನು ಗಿದ್ಯೋನನಿಗೆ, ''ಏಳು, ನೀನು
ಮಿದ್ಯಾನ್ಯರ ಸೈನ್ಯವನ್ನು ಸೋಲಿಸುವಂತೆ ಮಾಡುತ್ತೇನೆ.
ಅವರ ಪಾಳೆಯಕ್ಕೆ ಹೋಗು. 10ಒಬ್ಬನೇ ಹೋಗಲು
ನಿನಗೆ ಹೆದರಿಕೆಯಾದರೆ ನಿನ್ನ ಸೇವಕನಾದ ಪುರನನ್ನು
ಜೊತೆಗೆ ಕರೆದುಕೊಂಡು ಹೋಗು. 11ಮಿದ್ಯಾನ್ಯರ ಶಿಬಿ
ರದ ಒಳಗಡೆ ಹೋಗಿ ಅವರ ಮಾತುಗಳನ್ನು ಕೇಳಿಸಿಕೋ.
ಆಗ ನೀನು ಅವರ ಮೇಲೆ ಧಾಳಿಮಾಡುವುದಕ್ಕೆ ಹೆದರು
ವುದಿಲ್ಲ'' ಎಂದನು.

ಗಿದ್ಯೋನನು ಮತ್ತು ಅವನ ಸೇವಕನಾದ ಪುರನು
ಇಬ್ಬರೂ ಶತ್ರುಗಳ ಪಾಳೆಯದ ಗಡಿಯವರೆಗೂ
ಹೋದರು. 12ಮಿದ್ಯಾನ್ಯರು, ಅಮಾಲೇಕ್ಯರು ಮತ್ತು
ಪೂರ್ವದೇಶದ ಉಳಿದೆಲ್ಲ ಜನರು ಆ ತಗ್ಗಿನಲ್ಲಿ ಪಾಳೆಯ
ಮಾಡಿಕೊಂಡಿದ್ದರು. ಅವರು ಅಸಂಖ್ಯಾತವಾಗಿದ್ದು ಮಿಡ
ತೆಯ ಗುಂಪಿನಂತೆ ಕಂಡರು. ಅವರಲ್ಲಿದ್ದ ಒಂಟೆಗಳೋ
ಲೆಕ್ಕವಿಲ್ಲದ ಸಮುದ್ರ ತೀರದ ಮರಳಿನಂತೆ ಎದ್ದು
ಕಾಣುತ್ತಿದ್ದವು.

13ಗಿದ್ಯೋನನು ಶತ್ರುಗಳ ಪಾಳೆಯಕ್ಕೆ ಬಂದಾಗ ಒಬ್ಬನ
ಮಾತನ್ನು ಕೇಳಿಸಿಕೊಂಡನು. ಆ ಮನುಷ್ಯನು ತಾನು ಕಂಡ
ಒಂದು ಕನಸಿನ ಬಗ್ಗೆ ತನ್ನ ಮಿತ್ರನಿಗೆ ಹೇಳುತ್ತಿದ್ದನು.
''ನಾನು ಕನಸಿನಲ್ಲಿ ಒಂದು ದುಂಡಾದ ರೊಟ್ಟಿಯು
ಉರುಳಿಕೊಂಡು ಮಿದ್ಯಾನ್ಯರ ಪಾಳೆಯದಲ್ಲಿ ಬರುವು
ದನ್ನು ಕಂಡೆ. ಆ ರೊಟ್ಟಿಯು ರಭಸದಿಂದ ಬಂದು ಒಂದು
ಗುಡಾರಕ್ಕೆ ಅಪ್ಪಳಿಸಲು ಆ ಗುಡಾರವು ಕುಸಿದು ಬಿತ್ತು''
ಎಂದನು.

14ಆ ಮನುಷ್ಯನ ಸ್ನೇಹಿತನು ಕನಸಿನ ಅರ್ಥವನ್ನು
ತಿಳಿದುಕೊಂಡು ಅವನಿಗೆ, ''ನಿನ್ನ ಕನಸು ಇಸ್ರೇಲಿನ
ಯೋವಾಷನ ಮಗನಾದ ಗಿದ್ಯೋನನ ಕುರಿತಾಗಿದೆ.
ಗಿದ್ಯೋನನು ಮಿದ್ಯಾನ್ಯರ ಇಡೀ ಸೈನ್ಯವನ್ನು ಸೋಲಿಸು
ವಂತೆ ದೇವರು ಮಾಡುತ್ತಾನೆ''ಎಂದನು.

15ಕನಸಿನ ಬಗ್ಗೆ ಮತ್ತು ಅದರ ಅರ್ಥದ ಬಗ್ಗೆ ಅವರು
ಮಾತನಾಡುವುದನ್ನು ಕೇಳಿದ ಗಿದ್ಯೋನನು ದೇವರಿಗೆ
ತಲೆಬಾಗಿ ನಮಸ್ಕರಿಸಿದನು. ಆಮೇಲೆ ಗಿದ್ಯೋನನು
ಇಸ್ರೇಲರ ಪಾಳೆಯಕ್ಕೆ ಹಿಂದಿರುಗಿದನು. ಗಿದ್ಯೋನನು
ಜನರನ್ನು, ''ಏಳಿರಿ! ಯೆಹೋವನು ಮಿದ್ಯಾನ್ಯರನ್ನು
ಸೋಲಿಸಲು ನಮಗೆ ಸಹಾಯ ಮಾಡುತ್ತಾನೆ'' ಎಂದು
ಕೂಗಿಕರೆದನು. 16ಆಮೇಲೆ ಗಿದ್ಯೋನನು ಆ ಮುನ್ನೂರು
ಜನರನ್ನು ಮೂರು ಗುಂಪುಗಳಾಗಿ ವಿಂಗಡಿಸಿದನು.
ಗಿದ್ಯೋನನು ಪ್ರತಿಯೊಬ್ಬನಿಗೆ ಒಂದು ತುತ್ತೂರಿ ಮತ್ತು
ಒಂದು ಬರಿದಾದ ಮಣ್ಣಿನ ಪಾತ್ರೆಯನ್ನು ಕೊಟ್ಟನು. ಪ್ರತಿ
ಯೊಂದು ಪಾತ್ರೆಯ ಒಳಗಡೆ ಒಂದು ಉರಿಯುತ್ತಿರುವ
ಪಂಜು ಇತ್ತು. 17ಗಿದ್ಯೋನನು ಅವರಿಗೆ, ''ನನ್ನನ್ನು ಗಮ
ನಿಸುತ್ತಾ ನಾನು ಮಾಡಿದಂತೆ ಮಾಡಿರಿ. ಶತ್ರುಗಳ ಪಾಳೆ
ಯದ ಸೀಮೆಯವರೆಗೆ ನನ್ನನ್ನು ಹಿಂಬಾಲಿಸಿ ಬನ್ನಿ. ನಾನು
ಪಾಳೆಯದ ಗಡಿಯನ್ನು ಮುಟ್ಟಿದ ಮೇಲೆ ನಾನು ಮಾಡಿ
ದಂತೆಯೇ ಮಾಡಿರಿ. 18ನೀವು ಶತ್ರುಗಳ ಪಾಳೆಯಕ್ಕೆ
ಮುತ್ತಿಗೆ ಹಾಕಿರಿ. ನನ್ನ ಸಂಗಡವಿರುವ ಜನರು ತುತ್ತೂರಿ
ಯನ್ನು ಊದುವರು. ನಾವು ನಮ್ಮ ತುತ್ತೂರಿಗಳನ್ನು
ಊದಿದಾಗ ನೀವು ಸಹ ನಿಮ್ಮ ತುತ್ತೂರಿಗಳನ್ನು ಊದಿರಿ.
'ಯೆಹೋವನಿಗೆ ಜಯ ಗಿದ್ಯೋನನಿಗೆ ಜಯ ಎಂದು
ಕೂಗಿರಿ'' ಎಂದು ಹೇಳಿದನು.

19ಗಿದ್ಯೋನನು ಮತ್ತು ಅವನ ಜೊತೆಯಲ್ಲಿದ್ದ ನೂರು
ಜನರು ಶತ್ರುಗಳ ಪಾಳೆಯದ ಬಳಿಗೆ ಹೋದರು. ಶತ್ರು
ಗಳ ಪಾಳೆಯದ ಕಾವಲುಗಾರರು ಬದಲಾದ ಕೂಡಲೆ
ಅವರು ಅಲ್ಲಿಗೆ ಹೋಗಿದ್ದರು. ಆಗ ಮಧ್ಯರಾತ್ರಿ
ಯಾಗಿತ್ತು. ಗಿದ್ಯೋನ ಮತ್ತು ಅವನ ಜನರು ತಮ್ಮ
ತುತ್ತೂರಿಗಳನ್ನು ಊದಿದರು ಮತ್ತು ಮಡಕೆಗಳನ್ನು
ಒಡೆದುಹಾಕಿದರು. 20ಆಗ ಗಿದ್ಯೋನನ ಮೂರು
ಗುಂಪಿನ ಜನರು ತಮ್ಮ ತುತ್ತೂರಿಗಳನ್ನು ಊದಿದರು
ಮತ್ತು ತಮ್ಮ ಮಡಕೆಗಳನ್ನು ಒಡೆದುಹಾಕಿದರು. ಅವರು
ಪಂಜುಗಳನ್ನು ತಮ್ಮ ಎಡಗೈಗಳಲ್ಲಿಯೂ ತುತ್ತೂರಿಗಳನ್ನು
ತಮ್ಮ ಬಲಗೈಗಳಲ್ಲಿಯೂ ಹಿಡಿದುಕೊಂಡರು. ಅವರು
ತಮ್ಮ ತುತ್ತೂರಿಗಳನ್ನು ಊದುತ್ತಾ ''ಯೆಹೋವನಿಗೆ
ಜಯ ಗಿದ್ಯೋನನಿಗೆ ಜಯ''ಎಂದು ಕೂಗಿಕೊಂಡರು.

21ಗಿದ್ಯೋನನ ಜನರು ನಿಂತಲ್ಲಿಯೇ ನಿಂತು
ಕೊಂಡರು. ಮಿದ್ಯಾನ್ಯರು ಕೂಗಿಕೊಂಡು ಓಡಿ
ಹೋಗಲು ಆರಂಭಿಸಿದರು.

22ಗಿದ್ಯೋನನ ಮುನ್ನೂರು ಜನರು ತಮ್ಮ ತುತ್ತೂರಿ
ಗಳನ್ನು ಊದಿದ ಕೂಡಲೆ ಮಿದ್ಯಾನ್ಯರು ತಮ್ಮ
ತಮ್ಮಲ್ಲಿಯೇ ಒಬ್ಬರನ್ನೊಬ್ಬರು ಕತ್ತಿಯಿಂದ ಇರಿದು

ಕೊಲ್ಲುವಂತೆ ಯೆಹೋವನು ಮಾಡಿದನು. ಶತ್ರುಗಳ
ಸೈನ್ಯವು ಚೆರೇರದ ದಾರಿಯಲ್ಲಿರುವ ಬೇತ್‌ಷಿಟ್ಟಿನ
ವರೆಗೂ ಓಡಿಹೋಯಿತು. ಅವರು ಟಬ್ಬಾತಿನ
ಬಳಿಯಲ್ಲಿರುವ ಅಬೇಲ್ಮೆಹೋಲಾ ನಗರದವರೆಗೂ
ಓಡಿದರು.
23 ಆಗ ನಫ್ತಾಲಿ, ಅಶೇರ ಮತ್ತು ಮನಸ್ಸೆಕುಲಗಳ ಎಲ್ಲ
ಸೈನಿಕರಿಗೆ ಮಿದ್ಯಾನ್ಯರನ್ನು ಬೆನ್ನಟ್ಟಲು ಹೇಳಲಾಯಿತು.
24 ಗಿದ್ಯೋನನು ಎಫ್ರಾಯೀಮ್ ಬೆಟ್ಟಪ್ರದೇಶಗಳಿಗೆ
ದೂತರನ್ನು ಕಳುಹಿಸಿದನು. ಆ ದೂತರು, ‘‘ಬನ್ನಿ,
ಮಿದ್ಯಾನ್ಯರ ಮೇಲೆ ದಾಳಿಮಾಡಿರಿ. ಬೇತ್‌ಬಾರದ
ವರೆಗಿನ ನದಿಯ ಮತ್ತು ಜೋರ್ಡನ್ ನದಿಯ ಪ್ರದೇಶ
ವನ್ನು ಹಿಡಿದುಕೊಳ್ಳಿರಿ. ಮಿದ್ಯಾನ್ಯರು ಅಲ್ಲಿಗೆ ಬರುವ
ಮೊದಲೇ ಈ ಕೆಲಸವನ್ನು ಮಾಡಿರಿ’’ ಎಂದು ತಿಳಿಸಿದರು.
ಅವರು ಎಫ್ರಾಯೀಮ್ ಕುಲದ ಎಲ್ಲ ಜನರನ್ನು ಕರೆ
ದರು. ಅವರು ಬೇತ್‌ಬಾರಾದವರೆಗೆ ನದಿಯ ಪ್ರದೇಶ
ವನ್ನು ಹಿಡಿದುಕೊಂಡರು. 25 ಎಫ್ರಾಯೀಮ್ಯರು ಮಿದ್ಯಾ
ನ್ಯರ ಇಬ್ಬರು ನಾಯಕರನ್ನು ಹಿಡಿದುಕೊಂಡರು. ಆ
ಇಬ್ಬರು ನಾಯಕರುಗಳ ಹೆಸರುಗಳು ಓರೇಬ್ ಮತ್ತು
ಜೇಬ್. ಎಫ್ರಾಯೀಮ್ಯರು ಓರೇಬನನ್ನು, ಓರೇಬ್
ಬಂಡೆಯ ಮೇಲೆಯೂ ಜೇಬನನ್ನು, ಜೇಬ್ ದ್ರಾಕ್ಷಿಯ
ಆಲೆಯಲ್ಲಿಯೂ ಕೊಂದುಹಾಕಿದರು. ಎಫ್ರಾಯೀ
ಮ್ಯರು ಮಿದ್ಯಾನ್ಯರನ್ನು ಬೆನ್ನಟ್ಟುತ್ತಲೇ ಹೋದರು.
ಅವರು ಓರೇಬ್ ಮತ್ತು ಜೇಬನ ತಲೆಗಳನ್ನು ಕತ್ತರಿಸಿ
ಅವುಗಳನ್ನು ತೆಗೆದುಕೊಂಡು ಜೋರ್ಡನ್ ನದಿಯ
ಹಾಯಗಡದಲ್ಲಿದ್ದ ಗಿದ್ಯೋನನ ಬಳಿಗೆ ತೆಗೆದುಕೊಂಡು
ಬಂದರು.

8 ಎಫ್ರಾಯೀಮ್ಯರು ಗಿದ್ಯೋನನ ಮೇಲೆ ಕೋಪ
ಗೊಂಡಿದ್ದರು. ಎಫ್ರಾಯೀಮ್ಯರು ಗಿದ್ಯೋನನನ್ನು
ಕಂಡಾಗ, ‘‘ನೀನು ನಮ್ಮ ಸಂಗಡ ಹೀಗೇಕೆವರ್ತಿ
ಸಿದೆ? ನೀನು ಮಿದ್ಯಾನ್ಯರೊಂದಿಗೆ ಯುದ್ಧಮಾಡಲು
ಹೋದಾಗ ನಮ್ಮನ್ನು ಏಕೆ ಕರೆಯಲಿಲ್ಲ?’’ ಎಂದು
ಗಿದ್ಯೋನನನ್ನು ಕೇಳಿದರು.
2 ಗಿದ್ಯೋನನು ಎಫ್ರಾಯೀಮ್ಯರಿಗೆ, ‘‘ನೀವು ಮಾಡಿ
ದಷ್ಟು ದೊಡ್ಡ ಕೆಲಸವನ್ನು ನಾನು ಮಾಡಿಲ್ಲ. ನನ್ನ
ಅಬೀಯೆಜೆರನ ಕುಟುಂಬದವರಿಗಿಂತ ಎಫ್ರಾಯೀಮ್ಯ
ರಾದ ನಿಮ್ಮ ಸುಗ್ಗಿಯೇ ಬಹಳ ಚೆನ್ನಾಗಿ ಆಗಿದೆಯಲ್ಲವೇ?
ಸುಗ್ಗಿಯ ಕಾಲದಲ್ಲಿ ನಮ್ಮ ಕುಟುಂಬದವರು ಕೂಡಿಸುವ
ದ್ರಾಕ್ಷಿಗಿಂತ ಹೆಚ್ಚು ದ್ರಾಕ್ಷಿಯನ್ನು ನೀವು ಹೊಲದಲ್ಲಿಯೇ
ಬಿಟ್ಟುಬಿಡುತ್ತೀರಿ! ಇದು ನಿಜವಲ್ಲವೇ?
3 ಅದೇ ರೀತಿ ಈಗಲೂ ಕೂಡ ನಿಮ್ಮದೇ ದೊಡ್ಡ ರಾಶಿ.
ಮಿದ್ಯಾನ್ಯರ ನಾಯಕರಾದ ಓರೇಬನನ್ನು ಮತ್ತು ಜೇಬ
ನನ್ನು ಸೆರೆ ಹಿಡಿಯುವಂತೆ ದೇವರು ನಿಮಗೆ ಸಹಾಯ
ಮಾಡಿದನು. ನೀವು ಮಾಡಿದ ಕೆಲಸಕ್ಕೆ ನನ್ನ ಜಯವನ್ನು
ಹೋಲಿಸಲು ಹೇಗೆ ಸಾಧ್ಯ?’’ ಗಿದ್ಯೋನನ ಉತ್ತರವನ್ನು
ಕೇಳಿದ ಮೇಲೆ ಎಫ್ರಾಯೀಮ್ಯರ ಕೋಪ ಕಡಿಮೆ
ಯಾಯಿತು.

### ಗಿದ್ಯೋನನು ಮಿದ್ಯಾನ್ಯರ ಇಬ್ಬರು ಅರಸರನ್ನು ಸೆರೆಹಿಡಿದನು

4 ಗಿದ್ಯೋನ ಮತ್ತು ಅವನ ಮುನ್ನೂರು ಜನರು
ಜೋರ್ಡನ್ ನದಿಯನ್ನು ದಾಟಿ ಆಚೆ ದಡಕ್ಕೆ ಹೋದರು.
ಅವರು ಬಹಳ ದಣಿದಿದ್ದರು ಮತ್ತು ಹಸಿದಿದ್ದರು.*
5 ಗಿದ್ಯೋನನು ಸುಖೋತ್ ನಗರದ ಜನರಿಗೆ, ‘‘ನನ್ನ ಸೈನಿ
ಕರಿಗೆ ತಿನ್ನಲು ಏನಾದರೂ ಕೊಡಿ; ಅವರು ಬಹಳ ದಣಿದು
ಹೋಗಿದ್ದಾರೆ. ನಾವು ಮಿದ್ಯಾನ್ಯರ ಅರಸನಾದ
ಜೆಬಹನನ್ನೂ ಚಲ್ಮುನ್ನನನ್ನೂ ಬೆನ್ನಟ್ಟಿಕೊಂಡು
ಹೋಗುತ್ತಿದ್ದೇವೆ’’ ಎಂದು ಹೇಳಿದನು.
6 ಆದರೆ ಸುಖೋತ್ ನಗರದ ನಾಯಕರು ಗಿದ್ಯೋನ
ನಿಗೆ, ‘‘ನಾವು ನಿಮ್ಮ ಸೈನಿಕರಿಗೆ ಆಹಾರವನ್ನು ಏಕೆ ಕೊಡ
ಬೇಕು? ನೀವು ಜೆಬಹನನ್ನು ಮತ್ತು ಚಲ್ಮುನ್ನನನ್ನು ಇನ್ನೂ
ಬಂಧಿಸಲೇ ಇಲ್ಲ’’ ಎಂದು ಹೇಳಿದರು.
7 ಅದಕ್ಕೆ ಗಿದ್ಯೋನನು, ‘‘ನೀವು ನಮಗೆ ಆಹಾರವನ್ನು
ಕೊಡುವುದಿಲ್ಲವಾದರೆ ಜೆಬಹನನ್ನು ಮತ್ತು ಚಲ್ಮುನ್ನನನ್ನು
ಬಂಧಿಸಲು ಯೆಹೋವನೇ ನಮಗೆ ಸಹಾಯ ಮಾಡು
ತ್ತಾನೆ. ಆಮೇಲೆ ನಾನು ಇಲ್ಲಿಗೆ ಬಂದು ನಿಮ್ಮನ್ನು ಮರಳು
ಗಾಡಿನ ಮುಳ್ಳುಗಳಿಂದಲೂ ಕುರುಚಲುಗಳಿಂದಲೂ
ಹೊಡಿಸುತ್ತೇನೆ’’ ಎಂದು ಉತ್ತರಿಸಿದನು.
8 ಗಿದ್ಯೋನನು ಸುಖೋತ್ ಎಂಬ ನಗರವನ್ನು ಬಿಟ್ಟು
ಪೆನೂವೇಲ್ ಎಂಬ ನಗರಕ್ಕೆ ಬಂದನು; ಆಹಾರಕ್ಕಾಗಿ
ಸುಖೋತ್ ಜನರನ್ನು ಕೇಳಿದಂತೆ ಪೆನೂವೇಲಿನ ಜನ
ರನ್ನೂ ಕೇಳಿದನು. ಆದರೆ ಪೆನೂವೇಲಿನ ಜನರು ಸಹ
ಸುಖೋತಿನ ಜನರಂತೆಯೇ ಉತ್ತರಿಸಿದರು.
9 ಪೆನೂವೇಲಿನ ಜನರಿಗೆ ಗಿದ್ಯೋನನು, ‘‘ನಾನು ಜಯ
ಸಂಪಾದಿಸಿದ ಮೇಲೆ ಇಲ್ಲಿಗೆ ಬಂದು ಈ ಬುರುಜನ್ನು
ಕೆಡವಿಬಿಡುತ್ತೇನೆ’’ ಅಂದನು.
10 ಜೆಬಹ ಮತ್ತು ಚಲ್ಮುನ್ನ ಮತ್ತು ಅವರ ಸೈನಿಕರು
ಕರ್ಕೋರ ಎಂಬ ನಗರದಲ್ಲಿದ್ದರು. ಅವರ ಸೈನ್ಯದಲ್ಲಿ ಹದಿ
ನೈದು ಸಾವಿರ ಸೈನಿಕರಿದ್ದರು. ಪೂರ್ವದೇಶದವರ ಸೈನ್ಯ
ದಲ್ಲಿ ಉಳಿದವರು ಇಷ್ಟೇ ಜನ. ಆ ಸೈನ್ಯದ ಒಂದು ಲಕ್ಷದ
ಇಪ್ಪತ್ತು ಸಾವಿರ ಜನರು ಈಗಾಗಲೇ ಯುದ್ಧದಲ್ಲಿ
ಸತ್ತಿದ್ದರು. 11 ಗಿದ್ಯೋನ ಮತ್ತು ಅವನ ಸೈನಿಕರು ‘ಗುಡಾರ
ನಿವಾಸಿಗಳ ಮಾರ್ಗ’ (ಕಾಡುಗೊಲ್ಲರ ಪ್ರದೇಶದ
ಮಾರ್ಗ)ವನ್ನು ಬಳಸಿದರು. ಆ ಮಾರ್ಗವು ನೋಬಹ,
ಯೊಗ್ಬೆಹಾ ನಗರಗಳ ಪೂರ್ವಕ್ಕೆ ಇದೆ. ಗಿದ್ಯೋನನು

**ಹಸಿದಿದ್ದರು** ಹೀಬ್ರೂ ಗ್ರಂಥಗಳಲ್ಲಿ ‘‘ಬೆನ್ನಟ್ಟುತ್ತಿದ್ದರು’’ ಎಂದು ಇದೆ.

ಕರ್ಕೋರ ನಗರಕ್ಕೆ ಬಂದು ಶತ್ರುಗಳ ಮೇಲೆ ದಾಳಿ
ಮಾಡಿದನು. ಶತ್ರುಸೈನ್ಯವು ಈ ದಾಳಿಯನ್ನು ನಿರೀಕ್ಷಿಸಿರ
ಲಿಲ್ಲ. [12]ಮಿದ್ಯಾನ್ಯರ ಅರಸರಾದ ಜೆಬಹನೂ
ಚಲ್ಮುನ್ನನೂ ಓಡಿಹೋದರು. ಆದರೆ ಗಿದ್ಯೋನನು
ಬೆನ್ನಟ್ಟಿ ಆ ಅರಸರನ್ನು ಹಿಡಿದುಕೊಂಡನು. ಗಿದ್ಯೋನ
ಮತ್ತು ಅವನ ಸೈನಿಕರು ಶತ್ರುಸೈನ್ಯವನ್ನು ಸೋಲಿಸಿದರು.

[13]ಯೋವಾಷನ ಮಗನಾದ ಗಿದ್ಯೋನನು ಯುದ್ಧ
ದಿಂದ ಹಿಂದಿರುಗಿದನು. ಗಿದ್ಯೋನ ಮತ್ತು ಅವನ ಸೈನಿ
ಕರು ಹೆರೆಸ್ ಎಂಬ ಒಂದು ಬೆಟ್ಟದ ಕಣಿವೆಯ ಮಾರ್ಗ
ವಾಗಿ ಹಿಂದಿರುಗಿದರು. [14]ಗಿದ್ಯೋನನು ಸುಖೋತ್
ನಗರದ ಒಬ್ಬ ತರುಣನನ್ನು ಹಿಡಿದುಕೊಂಡನು.
ಗಿದ್ಯೋನನು ಆ ತರುಣನಿಗೆ ಕೆಲವು ಪ್ರಶ್ನೆಗಳನ್ನು ಕೇಳಿ
ದನು. ಆ ತರುಣನು ಗಿದ್ಯೋನನಿಗಾಗಿ ಕೆಲವು ಹೆಸರು
ಗಳನ್ನು ಬರೆದನು. ಆ ತರುಣನು ಸುಖೋತ್ ನಗರದ
ನಾಯಕರ ಮತ್ತು ಹಿರಿಯರ ಹೆಸರುಗಳನ್ನು ಬರೆದನು.
ಅವನು ಎಪ್ಪತ್ತೇಳು ಜನರ ಹೆಸರುಗಳನ್ನು ಕೊಟ್ಟನು.

[15]ಗಿದ್ಯೋನನು ಸುಖೋತ್ ನಗರಕ್ಕೆ ಬಂದು ಆ
ನಗರದ ಜನರಿಗೆ, ‘‘ನೋಡಿರಿ, ಜೆಬಹ ಮತ್ತು ಚಲ್ಮುನ್ನ
ಇಲ್ಲಿದ್ದಾರೆ. ‘ಜೆಬಹ ಮತ್ತು ಚಲ್ಮುನ್ನರನ್ನು ನೀವು ಇನ್ನೂ
ಸೆರೆಹಿಡಿದಿಲ್ಲ. ನಿಮ್ಮ ದಣಿದ ಸೈನಿಕರಿಗೆ ಆಹಾರವನ್ನು
ನಾವೇಕೆ ಕೊಡಬೇಕು?’ ಎಂದು ನನ್ನನ್ನು ತಮಾಷೆ ಮಾಡಿ
ದಿರಿ’’ ಎಂದನು. [16]ಗಿದ್ಯೋನನು ಸುಖೋತ್ ನಗರದ
ಹಿರಿಯರಿಗೆ ಮರುಭೂಮಿಯ ಮುಳ್ಳುಗಳಿಂದ ಹೊಡೆಸಿ
ಶಿಕ್ಷಿಸಿದನು. [17]ಗಿದ್ಯೋನನು ಪೆನೂವೇಲಿನ ಬುರುಜನ್ನೂ
ಸಹ ಕೆಡವಿ ಆ ಪಟ್ಟಣದ ಜನರನ್ನು ಕೊಂದುಹಾಕಿದನು.

[18]ಆಮೇಲೆ ಗಿದ್ಯೋನನು ಜೆಬಹ ಮತ್ತು ಚಲ್ಮುನ್ನ
ರನ್ನು, ‘‘ನೀವು ತಾಬೋರ್ ಪರ್ವತದಲ್ಲಿ ಕೆಲವು ಜನ
ರನ್ನು ಕೊಂದಿರುವಿರಿ. ಅವರು ಹೇಗಿದ್ದರು?’’ ಎಂದು
ಕೇಳಿದನು.

ಅವರು ‘‘ನಿನ್ನ ಹಾಗೆಯೇ ಇದ್ದರು. ಅವರಲ್ಲಿ ಪ್ರತಿಯೊ
ಬ್ಬನೂ ಒಬ್ಬ ರಾಜಕುಮಾರನಂತೆ ಕಂಡನು’’ ಎಂದರು.

[19]ಗಿದ್ಯೋನನು, ‘‘ಆ ಜನರು ನನ್ನ ಸಹೋದರರಾಗಿ
ದ್ದರು. ನನ್ನ ತಾಯಿಯ ಮಕ್ಕಳು! ಯೆಹೋವನ ಮೇಲೆ
ಆಣೆಮಾಡಿ ಹೇಳುತ್ತೇನೆ, ನೀವು ಅವರನ್ನು ಕೊಲ್ಲದಿದ್ದರೆ
ನಾನು ಈಗ ನಿಮ್ಮನ್ನು ಕೊಲ್ಲುತ್ತಿರಲಿಲ್ಲ’’ ಎಂದು
ಹೇಳಿದನು. [20]ಗಿದ್ಯೋನನು ಎತೆರನ ಕಡೆಗೆ ತಿರುಗಿದನು.
ಎತೆರನು ಗಿದ್ಯೋನನ ಹಿರಿಯ ಮಗ. ಗಿದ್ಯೋನನು
ಅವನಿಗೆ, ‘‘ಈ ಅರಸರನ್ನು ಕೊಲ್ಲು’’ ಎಂದು ಹೇಳಿದನು.
ಆದರೆ ಎತೆರನು ಇನ್ನೂ ಹುಡುಗನಾಗಿದ್ದುದರಿಂದ ಭಯ
ಪಟ್ಟನು. ಅವನು ತನ್ನ ಕತ್ತಿಯನ್ನು ಹೊರ ತೆಗೆಯಲಿಲ್ಲ.

[21]ಆಗ ಜೆಬಹ ಮತ್ತು ಚಲ್ಮುನ್ನರು ಗಿದ್ಯೋನನಿಗೆ,
‘‘ನೀನೇ ನಮ್ಮನ್ನು ಕೊಲ್ಲು. ನೀನು ಈ ಕೆಲಸವನ್ನು
ಮಾಡುವುದಕ್ಕೆ ಯೋಗ್ಯವಯಸ್ಸಿನವನೂ ಗಟ್ಟಿಗನೂ
ಆಗಿರುವೆ’’ ಎಂದರು. ಗಿದ್ಯೋನನು ಎದ್ದು ಜೆಬಹ ಮತ್ತು
ಚಲ್ಮುನ್ನರನ್ನು ಕೊಂದುಹಾಕಿದನು. ಆಮೇಲೆ
ಗಿದ್ಯೋನನು ಅವರ ಒಂಟೆಗಳ ಕೊರಳಲ್ಲಿದ್ದ ಅರ್ಧ
ಚಂದ್ರಾಕಾರದ ಆಭರಣಗಳನ್ನು ತೆಗೆದುಕೊಂಡನು.

### ಗಿದ್ಯೋನನು ಒಂದು ಏಫೋದನ್ನು* ಮಾಡಿಸಿದನು

[22]ಇಸ್ರೇಲಿಯರು ಗಿದ್ಯೋನನಿಗೆ, ‘‘ನೀನು ನಮ್ಮನ್ನು
ಮಿದ್ಯಾನ್ಯರಿಂದ ರಕ್ಷಿಸಿರುವೆ. ಅದಕ್ಕಾಗಿ ಈಗ ನಮ್ಮ
ಮೇಲೆ ಆಳ್ವಿಕೆ ಮಾಡು. ನೀನೂ ನಿನ್ನ ಮಗನೂ ನಿನ್ನ
ಮೊಮ್ಮಗನೂ ನಮ್ಮನ್ನು ಆಳಬೇಕೆಂಬುದು ನಮ್ಮ ಆಶೆ’’
ಎಂದು ಹೇಳಿದರು.

[23]ಗಿದ್ಯೋನನು ಇಸ್ರೇಲರಿಗೆ, ‘‘ಯೆಹೋವನು
ನಿಮ್ಮನ್ನು ಆಳುತ್ತಾನೆ. ನಾನು ನಿಮ್ಮನ್ನು ಆಳುವುದಿಲ್ಲ; ನನ್ನ
ಮಗನೂ ನಿಮ್ಮನ್ನು ಆಳುವುದಿಲ್ಲ’’ ಎಂದು ಹೇಳಿದನು.

[24]ಇಸ್ರೇಲರು ಸೋಲಿಸಿದ ಜನರಲ್ಲಿ ಕೆಲವರು
ಇಷ್ಮಾಯೇಲ್ಯರಾಗಿದ್ದರು. ಇಷ್ಮಾಯೇಲ್ಯರು ಕಿವಿಗಳಲ್ಲಿ
ಚಿನ್ನದ ಮುರುವುಗಳನ್ನು ಹಾಕಿಕೊಳ್ಳುತ್ತಿದ್ದರು. ಆದುದ
ರಿಂದ ಗಿದ್ಯೋನನು ಇಸ್ರೇಲರಿಗೆ, ‘‘ನೀವು ನನಗಾಗಿ ಈ
ಒಂದು ಕೆಲಸವನ್ನು ಮಾಡಬೇಕೆಂದು ನನ್ನ ಕೋರಿಕೆ.
ನೀವು ಯುದ್ಧದಲ್ಲಿ ಕೊಳ್ಳೆಹೊಡೆದ ವಸ್ತುಗಳಿಂದ ಪ್ರತಿ
ಯೊಬ್ಬನು ಒಂದು ಬಂಗಾರದ ಮುರುವನ್ನು ನನಗೆ
ಕೊಡಬೇಕು’’ ಎಂದು ಕೇಳಿದನು.

[25]ಇಸ್ರೇಲರು, ‘‘ನೀನು ಕೇಳಿದ್ದನ್ನು ಸಂತೋಷದಿಂದ
ಕೊಡುತ್ತೇವೆ’’ ಎಂದು ಹೇಳಿ ನೆಲದ ಮೇಲೆ ಒಂದು
ಮೇಲಂಗಿಯನ್ನು ಹಾಸಿದರು. ಪ್ರತಿಯೊಬ್ಬನು
ಒಂದೊಂದು ಮುರುವನ್ನು ಆ ಅಂಗಿಯ ಮೇಲೆ
ಎಸೆದನು. [26]ಆ ಮುರುವುಗಳನ್ನು ಒಟ್ಟುಗೂಡಿಸಿ ತೂಕ
ಹಾಕಿದಾಗ ಅವುಗಳ ತೂಕ ನಲವತ್ತಮೂರು ಪೌಂಡಿ
ನಷ್ಟಿತ್ತು. ಗಿದ್ಯೋನನಿಗೆ ಇಸ್ರೇಲರು ಕೊಟ್ಟ ಬೇರೆ ಕಾಣಿಕೆ
ಗಳು ಇದರಲ್ಲಿ ಸೇರಿಲ್ಲ. ಅವರು ಚಂದ್ರಾಕಾರದ ಮತ್ತು
ಕಣ್ಣೀರಿನಾಕಾರದ ಆಭರಣಗಳನ್ನು ಸಹ ಕೊಟ್ಟಿದ್ದರು.
ಅವರು ಅವನಿಗೆ ನೇರಳೆ ಬಣ್ಣದ ನಿಲುವಂಗಿಗಳನ್ನು
ಕೊಟ್ಟಿದ್ದರು. ಈ ವಸ್ತ್ರಗಳನ್ನು ಮಿದ್ಯಾನ್ಯರ ಅರಸರು
ಧರಿಸುತ್ತಿದ್ದರು. ಅವರು ಮಿದ್ಯಾನ್ಯರ ಒಂಟೆಗಳ
ಸರಗಳನ್ನು ಸಹ ಕೊಟ್ಟರು.

[27]ಗಿದ್ಯೋನನು ಈ ಚಿನ್ನವನ್ನು ಒಂದು ಏಫೋದ್
ಮಾಡುವುದಕ್ಕೆ ಬಳಸಿದನು. ಆ ಏಫೋದನ್ನು ತನ್ನ
ಊರಾದ ಒಫ್ರದಲ್ಲಿಟ್ಟನು. ಇಸ್ರೇಲರು ಈ ಏಫೋದನ್ನು
ಆರಾಧಿಸಿದರು. ಹೀಗಾಗಿ ಇಸ್ರೇಲರು ಯೆಹೋವನಿಗೆ
ನಂಬಿಗಸ್ತರಾಗಿರಲಿಲ್ಲ. ಗಿದ್ಯೋನನನ್ನು ಮತ್ತು ಅವನ

---

**ಏಫೋದ್** ಇದು ಏನೆಂಬುದು ನಮಗೆ ಸರಿಯಾಗಿ ಗೊತ್ತಿಲ್ಲ. ಇದೊಂದು ವಿಶೇಷವಾದ ಕೋಟು, ‘ಮೇಲಂಗಿ’ ಆಗಿರಬಹುದು ಅಥವಾ ಇದೊಂದು ವಿಗ್ರಹವೂ ಆಗಿರಬಹುದು.

ಕುಟುಂಬದವರನ್ನು ಪಾಪಮಾರ್ಗಕ್ಕೆ ಎಳೆಯಲು ಏಫೋದ್ ಒಂದು ಉರುಲಾಗಿ ಪರಿಣಮಿಸಿತು.

### ಗಿದ್ಯೋನನ ಮರಣ

28 ಮಿದ್ಯಾನ್ಯರು ಇಸ್ರೇಲರ ಅಧೀನದಲ್ಲಿರಬೇಕಾಯಿತು. ಮಿದ್ಯಾನ್ಯರು ಯಾವ ಹೆಚ್ಚಿನ ತೊಂದರೆಗಳನ್ನು ಕೊಡಲಿಲ್ಲ. ಗಿದ್ಯೋನನು ಬದುಕಿರುವವರೆಗೆ ನಲವತ್ತು ವರ್ಷ ಆ ದೇಶದಲ್ಲಿ ಶಾಂತಿ ನೆಲೆಸಿತ್ತು.

29 ಯೋವಾಷನಮಗ ಯೆರುಬ್ಬಾಳನು( ಗಿದ್ಯೋನನು) ತನ್ನ ಮನೆಯಲ್ಲಿ ವಾಸವಾಗಿದ್ದನು. 30 ಗಿದ್ಯೋನನಿಗೆ ಎಪ್ಪತ್ತು ಮಂದಿ ಮಕ್ಕಳಿದ್ದರು. ಅವನಿಗೆ ಅನೇಕ ಹೆಂಡತಿಯರಿದ್ದರು. 31 ಗಿದ್ಯೋನನಿಗೆ ಒಬ್ಬ ಉಪಪತ್ನಿಯೂ ಇದ್ದಳು. ಅವಳು ಶೆಕೆಮಿನಲ್ಲಿರುತ್ತಿದ್ದಳು. ಅವಳಲ್ಲಿ ಅವನಿಗೆ ಒಬ್ಬ ಮಗನು ಹುಟ್ಟಿದನು. ಗಿದ್ಯೋನನು ಅವನಿಗೆ ಅಬೀಮೆಲೆಕ ಎಂದು ಹೆಸರಿಟ್ಟನು.

32 ಯೋವಾಷನ ಮಗನಾದ ಗಿದ್ಯೋನನು ದಿನ ತುಂಬಿದ ಮುದುಕನಾಗಿ ಮರಣಹೊಂದಿದನು. ಗಿದ್ಯೋನನ ಶವವನ್ನು ಅವನ ತಂದೆಯಾದ ಯೋವಾಷನಿಗೆ ಸೇರಿದ್ದ ಒಂದು ಸಮಾಧಿಯಲ್ಲಿ ಹೂಳಿದರು. ಆ ಸಮಾಧಿಯು ಅಬೀಯೆಜೆರ್ ಕುಟುಂಬದವರ ಒಫ್ರದಲ್ಲಿತ್ತು. 33 ಗಿದ್ಯೋನನು ಸತ್ತಮೇಲೆ ಇಸ್ರೇಲರು ಯೆಹೋವನಿಗೆ ನಂಬಿಗಸ್ತರಾಗಿರಲಿಲ್ಲ. ಅವರು ಬಾಳನನ್ನು ಪೂಜಿಸಿದರು. ಬಾಳ್‌ಬೆರೀತನನ್ನು* ತಮ್ಮ ದೇವರನ್ನಾಗಿ ಮಾಡಿಕೊಂಡರು. 34 ಯೆಹೋವನು ಅವರನ್ನು ಅವರ ಸುತ್ತಮುತ್ತಲಿನ ಎಲ್ಲ ಶತ್ರುಗಳಿಂದ ರಕ್ಷಿಸಿದ್ದರೂ ಇಸ್ರೇಲರು ತಮ್ಮ ದೇವರಾದ ಯೆಹೋವನನ್ನು ಜ್ಞಾಪಿಸಿಕೊಳ್ಳಲಿಲ್ಲ. 35 ಯೆರುಬ್ಬಾಳನು ಅನೇಕ ಸತ್ಕಾರ್ಯಗಳನ್ನು ಮಾಡಿದರೂ ಸಹ ಇಸ್ರೇಲರು ಅವನ ಕುಟುಂಬದವರಿಗೆ ಕೃತಜ್ಞತೆಯುಳ್ಳವರಾಗಿರಲಿಲ್ಲ.

### ಅಬೀಮೆಲೆಕನು ಅರಸನಾದನು

9 ಅಬೀಮೆಲೆಕನು ಯೆರುಬ್ಬಾಳನ (ಗಿದ್ಯೋನನ) ಮಗನು. ಅಬೀಮೆಲೆಕನು ಶೆಕೆಮಿನಲ್ಲಿದ್ದ ತನ್ನ ಸೋದರ ಮಾವಂದಿರಲ್ಲಿಗೆ ಹೋದನು. ಅವನು ತನ್ನ ಸೋದರ ಮಾವಂದಿರಿಗೂ ತನ್ನ ತಾಯಿಯ ಕುಟುಂಬದವರೆಲ್ಲರಿಗೂ ಮತ್ತು 2 ''ಶೆಕೆಮಿನ ಹಿರಿಯರಿಗೆ 'ಯೆರುಬ್ಬಾಳನ ಎಪ್ಪತ್ತು ಮಂದಿ ಮಕ್ಕಳು ನಿಮ್ಮನ್ನು ಆಳುವುದು ಒಳ್ಳೆಯದೋ ಅಥವಾ ನಾನೊಬ್ಬನೇ ನಿಮ್ಮನ್ನು ಆಳುವುದು ಒಳ್ಳೆಯದೋ' ಎಂಬ ಪ್ರಶ್ನೆಯನ್ನು ಕೇಳಿದ್ದಲ್ಲದೆ ನಾನು ನಿಮ್ಮ ರಕ್ತಸಂಬಂಧಿ ಎಂಬುದನ್ನು ನೆನಪಿಡಿ'' ಎಂದು ಹೇಳಿದನು.

3 ಅಬೀಮೆಲೆಕನ ಸೋದರ ಮಾವಂದಿರು ಶೆಕೆಮಿನ ಹಿರಿಯರ ಜೊತೆ ಮಾತನಾಡಿ ಅವರಿಗೆ ಆ ಪ್ರಶ್ನೆಯನ್ನು ಕೇಳಿದರು. ಶೆಕೆಮಿನ ಹಿರಿಯರು ಅಬೀಮೆಲೆಕನ ಪಕ್ಷವಹಿಸಲು ನಿರ್ಧರಿಸಿದರು. ಆ ಹಿರಿಯರು, ''ಎಷ್ಟೇ ಆದರೂ ಅವನು ನಮ್ಮ ಸಹೋದರ'' ಎಂದರು.
4 ಶೆಕೆಮಿನ ಹಿರಿಯರು ಅಬೀಮೆಲೆಕನಿಗೆ ಎಪ್ಪತ್ತು ಬೆಳ್ಳಿಯ ನಾಣ್ಯಗಳನ್ನು ಕೊಟ್ಟರು. ಆ ಬೆಳ್ಳಿಯು ಬಾಳ್‌ಬೆರೀತನ ಗುಡಿಗೆ ಸೇರಿತ್ತು. ಕೆಲವು ಗಂಡಸರನ್ನು ಕೂಲಿಗೆ ತೆಗೆದುಕೊಳ್ಳಲು ಅವನು ಈ ಬೆಳ್ಳಿಯನ್ನು ಬಳಸಿಕೊಂಡನು. ಈ ಗಂಡಸರು ಅಯೋಗ್ಯರೂ ದುಷ್ಟರೂ ಆಗಿದ್ದರು. ಅವರು ಅಬೀಮೆಲೆಕನ ಹಿಂಬಾಲಕರಾಗಿದ್ದರು.

5 ಅಬೀಮೆಲೆಕನು ಒಫ್ರದಲ್ಲಿದ್ದ ತನ್ನ ತಂದೆಯ ಮನೆಗೆ ಹೋದನು. ಅಬೀಮೆಲೆಕನು ತನ್ನ ಸಹೋದರರ ಕೊಲೆ ಮಾಡಿದನು. ಅಬೀಮೆಲೆಕನು ತನ್ನ ತಂದೆಯಾದ ಯೆರುಬ್ಬಾಳನ (ಗಿದ್ಯೋನನ) ಎಪ್ಪತ್ತು ಮಕ್ಕಳನ್ನು ಕೊಂದನು. ಅವನು ಅವರೆಲ್ಲರನ್ನು ಏಕಕಾಲದಲ್ಲಿ ಕೊಂದನು. ಆದರೆ ಯೆರುಬ್ಬಾಳನ (ಗಿದ್ಯೋನನ) ಕಿರಿಯ ಮಗನು ಅಡಗಿಕೊಂಡಿದ್ದು ತಪ್ಪಿಸಿಕೊಂಡನು. ಆ ಕಿರಿಯ ಮಗನ ಹೆಸರು ಯೋತಾಮ.

6 ತರುವಾಯ ಶೆಕೆಮಿನ ಎಲ್ಲ ಹಿರಿಯರೂ ಮಿಲ್ಲೋ* ಕೋಟೆಯವರೂ ಒಂದೆಡೆ ಬಂದರು. ಅವರೆಲ್ಲರೂ ಶೆಕೆಮಿನಲ್ಲಿದ್ದ ಜ್ಞಾಪಕಸ್ತಂಭದ ಬಳಿ ಇರುವ ದೊಡ್ಡ ಮರದ ಕೆಳಗೆ ಸೇರಿ ಅಬೀಮೆಲೆಕನನ್ನು ತಮ್ಮ ಅರಸನನ್ನಾಗಿ ಮಾಡಿದರು.

### ಯೋತಾಮನ ಕಥೆ

7 ಶೆಕೆಮಿನ ಹಿರಿಯರು ಅಬೀಮೆಲೆಕನನ್ನು ಅರಸನನ್ನಾಗಿ ಮಾಡಿದ ಸಮಾಚಾರವನ್ನು ಯೋತಾಮನು ಕೇಳಿದನು. ಕೂಡಲೇ ಅವನು ಹೋಗಿ ಗೆರಿಜ್ಜೀಮ್* ಬೆಟ್ಟದ ತುದಿಯಲ್ಲಿ ನಿಂತುಕೊಂಡನು. ಯೋತಾಮನು ಜನರಿಗೆ ಈ ಕಥೆಯನ್ನು ಕೂಗಿಕೂಗಿ ಹೇಳಿದನು:

ಶೆಕೆಮಿನ ಹಿರಿಯರೇ, ನನ್ನ ಮಾತನ್ನು ಕೇಳಿರಿ;
ಆಗ ಯೆಹೋವನು ನಿಮ್ಮ ಮಾತನ್ನು ಕೇಳುವನು.
8 ಒಮ್ಮೆ ಮರಗಳು ತಮ್ಮನ್ನು ಆಳುವುದಕ್ಕೆ ಒಬ್ಬ
ಅರಸನನ್ನು ಆರಿಸಬೇಕೆಂದು ನಿರ್ಧರಿಸಿದವು. ಆ
ಮರಗಳು ಆಲಿವ್ ಮರಕ್ಕೆ, ''ನೀನು ನಮ್ಮ ಅರಸ
ನಾಗಿ ಆಳು'' ಎಂದು ಕೇಳಿಕೊಂಡವು.

---

**ಬಾಳ್‌ಬೆರೀತ್** ಈಹೆಸರಿನ ಅರ್ಥ ''ಒಡಂಬಡಿಕೆಯ ಪ್ರಭು'' ಎಂದು ಆಗುತ್ತದೆ.

**ಮಿಲ್ಲೋ** ಬಹುಶಃ ನಗರದ ಭದ್ರವಾದ ಭಾಗ. ಇದು ಪಟ್ಟಣದಲ್ಲಿಯೇ ಅಥವಾ ಪಟ್ಟಣದ ಸಮೀಪ ಇದ್ದಿರಬಹುದು.

**ಗೆರಿಜ್ಜೀಮ್ ಪರ್ವತ** ಈ ಪರ್ವತವು ಶೆಕೆಮಿನ ಪಕ್ಕದಲ್ಲಿದೆ.

9 ಆದರೆ ಆಲಿವ್ ಮರವು, ''ಜನರು ಮತ್ತು
ದೇವತೆಗಳು ನನ್ನ ಎಣ್ಣೆಗಾಗಿ ನನ್ನನ್ನು ತುಂಬ
ಹೊಗಳುತ್ತಾರೆ; ಬೇರೆ ಮರಗಳ ಮೇಲೆ ಆಳುವು
ದಕ್ಕಾಗಿ ನಾನು ಎಣ್ಣೆ ಮಾಡುವುದನ್ನು ಬಿಡ
ಬೇಕೇ?'' ಎಂದು ಕೇಳಿತು.

10 ಆಗ ಆ ಮರಗಳು ಅಂಜೂರದ ಮರದ ಬಳಿಗೆ
ಹೋಗಿ, ''ನೀನು ಬಂದು ನಮ್ಮ ಅರಸನಾಗು''
ಎಂದು ಕೇಳಿದವು.

11 ಆದರೆ ಅಂಜೂರದ ಮರವು, ''ನಾನು ಕೇವಲ
ಬೇರೆ ಮರಗಳ ಮೇಲೆ ಆಳ್ವಿಕೆ ಮಾಡುವುದಕ್ಕಾಗಿ
ಉತ್ತಮವಾದ ಮತ್ತು ರುಚಿಕರವಾದ ಹಣ್ಣುಗಳು
ಫಲಿಸುವುದನ್ನು ನಿಲ್ಲಿಸಬೇಕೇ?'' ಎಂದು ಕೇಳಿತು.

12 ಅನಂತರ ಅವು ದ್ರಾಕ್ಷಾಲತೆಯ ಬಳಿಗೆ
ಹೋಗಿ, ''ನೀನು ಬಂದು ನಮ್ಮ ಅರಸನಾಗು''
ಎಂದವು.

13 ಆದರೆ ದ್ರಾಕ್ಷಾಲತೆಯು, ''ನನ್ನ ರಸವು ಎಲ್ಲ
ಜನರಿಗೂ ಮತ್ತು ರಾಜರುಗಳಿಗೂ ಸಂತೋಷ
ವನ್ನು ಉಂಟು ಮಾಡುತ್ತದೆ. ಕೇವಲ ಬೇರೆ
ಮರಗಳ ಮೇಲೆ ಅಧಿಕಾರ ನಡೆಸುವುದಕ್ಕಾಗಿ
ನಾನು ನನ್ನ ರಸ ಕೊಡುವುದನ್ನು ನಿಲ್ಲಿಸಬೇಕೇ?''
ಎಂದು ಕೇಳಿತು.

14 ಕೊನೆಗೆ ಎಲ್ಲ ಮರಗಳು ಮುಳ್ಳುಪೊದೆಗೆ,
''ಬಂದು ನಮ್ಮ ಅರಸನಾಗು'' ಎಂದು ಕೇಳಿದವು.

15 ಆ ಮುಳ್ಳುಪೊದೆಯು, ''ನೀವು ನಿಜ
ವಾಗಿಯೂ ನನ್ನನ್ನು ನಿಮ್ಮ ಅರಸನನ್ನಾಗಿ ಮಾಡ
ಬೇಕೆಂದು ಇಚ್ಛೆಪಟ್ಟರೆ ನೀವು ಬಂದು ನನ್ನ ನೆರಳಿ
ನಲ್ಲಿ ಆಶ್ರಯ ಪಡೆಯಿರಿ; ನೀವು ಹೀಗೆ ಮಾಡಲು
ಒಪ್ಪದಿದ್ದರೆ ನನ್ನಿಂದ ಬೆಂಕಿ ಹೊರಡಲಿ. ಆ
ಬೆಂಕಿಯು ಲೆಬನೋನಿನ ದೇವದಾರು ವೃಕ್ಷಗಳನ್ನು
ದಹಿಸಿಬಿಡಲಿ'' ಎಂದಿತು.

16 ''ನೀವು ಅಬೀಮೆಲೆಕನನ್ನು ಅರಸನನ್ನಾಗಿ ಮಾಡು
ವಾಗ ಪ್ರಾಮಾಣಿಕರಾಗಿದ್ದರೆ, ಅವನ ಸಂಗಡ ಸಂತೋಷ
ದಿಂದಿರಿ. ನೀವು ಯೆರುಬ್ಬಾಳ ಮತ್ತು ಅವನ ಕುಟುಂಬದ
ವರೊಡನೆ ನ್ಯಾಯದಿಂದ ನಡೆದುಕೊಂಡಿದ್ದರೆ ಒಳ್ಳೆ
ಯದೇ ಸರಿ. ನೀವು ಯೆರುಬ್ಬಾಳನಿಗೋಸ್ಕರ ಏನು ಮಾಡ
ಬೇಕಿತ್ತೋ ಅದನ್ನು ಮಾಡಿದ್ದರೆ ಒಳ್ಳೆಯದು. 17 ಆದರೆ
ನಿಮಗೆ ನಮ್ಮ ತಂದೆಯು ಏನು ಮಾಡಿದನೆಂಬುದನ್ನು
ಯೋಚಿಸಿರಿ. ನಮ್ಮ ತಂದೆಯು ನಿಮಗೋಸ್ಕರ ಯುದ್ಧ
ಮಾಡಿದನು. ಅವನು ಮಿದ್ಯಾನ್ಯರಿಂದ ನಿಮ್ಮನ್ನು ರಕ್ಷಿಸಲು
ತನ್ನ ಜೀವವನ್ನು ಅಪಾಯಕ್ಕೆ ಒಡ್ಡಿದನು. 18 ಆದರೆ ನೀವು
ಈಗ ನಮ್ಮ ತಂದೆಯ ಕುಟುಂಬದವರನ್ನು ವಿರೋಧಿಸು
ತ್ತಿದ್ದೀರಿ. ನೀವು ನಮ್ಮ ತಂದೆಯ ಎಪ್ಪತ್ತು ಮಕ್ಕಳನ್ನು ಏಕ
ಕಾಲದಲ್ಲಿ ಕೊಲೆ ಮಾಡಿದ್ದೀರಿ. ನೀವು ಅಬೀಮೆಲೆಕನನ್ನು
ಶೆಕೆಮಿನ ಅರಸನನ್ನಾಗಿ ಮಾಡಿದ್ದೀರಿ. ಅವನು ನಿಮ್ಮ ರಕ್ತ
ಸಂಬಂಧಿ ಎಂಬ ಕಾರಣದಿಂದ ಅವನನ್ನು ಅರಸನನ್ನಾಗಿ
ಮಾಡಿದ್ದೀರಿ. ಆದರೆ ಅವನು ಕೇವಲ ನಮ್ಮ ತಂದೆಯ
ದಾಸಿಪುತ್ರ. 19 ನೀವು ಇಂದು ಯೆರುಬ್ಬಾಳನಿಗೂ ಅವನ
ಮನೆಯವರಿಗೂ ಮಾಡಿದ್ದು ನ್ಯಾಯವೂ ಧರ್ಮವೂ
ಆಗಿದ್ದರೆ ನೀವು ಅಬೀಮೆಲೆಕನನ್ನು ನಿಮ್ಮ ಅರಸನೆಂದು
ಒಪ್ಪಿ ಸಂತೋಷದಿಂದ ಇದ್ದುಬಿಡಿ. ಅವನೂ ನಿಮ್ಮ ಜೊತೆ
ಸಂತೋಷದಿಂದ ಇರಲಿ. 20 ಆದರೆ ನೀವು ಮಾಡಿದ್ದು ಸರಿ
ಯಾಗಿರದ ಪಕ್ಷದಲ್ಲಿ ಶೆಕೆಮಿನ ಹಿರಿಯರಾದ ನಿಮ್ಮನ್ನೂ
ಮಿಲ್ಲೋ ಕೋಟೆಯವರನ್ನೂ ಅಬೀಮೆಲೆಕನು ನಾಶ
ಮಾಡಲಿ. ಅಬೀಮೆಲೆಕನು ಕೂಡ ನಾಶಹೊಂದಲಿ''
ಎಂದನು. 21 ಇದನ್ನೆಲ್ಲಾ ಹೇಳಿ ಯೋತಾಮನು ಬೇರ
ಎಂಬ ನಗರಕ್ಕೆ ಓಡಿಹೋದನು. ಯೋತಾಮನು ತನ್ನ
ಬಂಧುವಾದ ಅಬೀಮೆಲೆಕನಿಗೆ ಹೆದರಿ ಅದೇ ನಗರದಲ್ಲಿ
ಉಳಿದುಕೊಂಡನು.

### ಶೆಕೆಮಿನ ಜನರ ವಿರುದ್ಧ ಅಬೀಮೆಲೆಕನ ಯುದ್ಧ

22 ಅಬೀಮೆಲೆಕನು ಇಸ್ರೇಲರನ್ನು ಮೂರು ವರ್ಷ ಆಳಿ
ದನು. 23-24 ಅಬೀಮೆಲೆಕನು ಯೆರುಬ್ಬಾಳನ ಎಪ್ಪತ್ತು
ಮಕ್ಕಳನ್ನು ಕೊಂದಿದ್ದನು. ಅವರು ಅವನ ಸ್ವಂತ ಸಹೋದ
ರರಾಗಿದ್ದರು. ಶೆಕೆಮಿನ ಹಿರಿಯರು ಈ ದುಷ್ಕೃತ್ಯದಲ್ಲಿ
ಅವನಿಗೆ ಬೆಂಬಲ ಕೊಟ್ಟಿದ್ದರು. ಆದುದರಿಂದ
ಯೆಹೋವನು ಅಬೀಮೆಲೆಕನ ಮತ್ತು ಶೆಕೆಮಿನ ಹಿರಿ
ಯರ ಮಧ್ಯೆ ಮನಸ್ತಾಪವಾಗುವಂತೆ ಮಾಡಿದನು.
ಶೆಕೆಮಿನ ಹಿರಿಯರು ಅಬೀಮೆಲೆಕನಿಗೆ ಕಷ್ಟಕೊಡಲು
ಯೋಚಿಸುತ್ತಿದ್ದರು. 25 ಶೆಕೆಮಿನ ಹಿರಿಯರಿಗೆ ಅಬೀಮೆಲೆ
ಕನ ಮೇಲಿದ್ದ ಅಭಿಮಾನ ಇಲ್ಲವಾಯಿತು. ಅವರು ಅಲ್ಲಿ
ಸಂಚರಿಸುವ ಜನರ ಮೇಲೆ ಧಾಳಿಮಾಡಿ ಲೂಟಿಮಾಡಲು
ಬೆಟ್ಟಗಳ ಮೇಲೆ ಜನರನ್ನು ಇಟ್ಟರು. ಅಬೀಮೆಲೆಕನಿಗೆ
ಈ ಧಾಳಿಗಳ ವಿಷಯ ತಿಳಿದುಬಂತು.

26 ಎಬೆದನ ಮಗನಾದ ಗಾಳನೆಂಬವನು ತನ್ನ ಸಹೋದ
ರರ ಸಮೇತ ಶೆಕೆಮಿಗೆ ಬಂದನು. ಶೆಕೆಮಿನ ಹಿರಿಯರು
ಗಾಳನನ್ನು ನಂಬಿ ಅವನನ್ನು ಅನುಸರಿಸಲು
ನಿರ್ಧರಿಸಿದರು.

27 ಶೆಕೆಮಿನ ಜನರು ದ್ರಾಕ್ಷಿಯನ್ನು ಕೊಯಿದುಕೊಂಡು
ಬರಲು ತಮ್ಮ ಹೊಲಗಳಿಗೆ ಹೋದರು. ಆ ದ್ರಾಕ್ಷಿಯನ್ನು
ಹಿಂಡಿ ದ್ರಾಕ್ಷಾರಸ ಮಾಡಿದರು. ಆಮೇಲೆ ತಮ್ಮ ದೇವರ
ಮಂದಿರದಲ್ಲಿ ಒಂದು ಉತ್ಸವವನ್ನು ಮಾಡಿದರು. ಆ
ಜನರು ತಿಂದು ಕುಡಿದು, ಅಬೀಮೆಲೆಕನ ಬಗ್ಗೆ ಕೆಟ್ಟ
ಮಾತುಗಳನ್ನು ಆಡಿದರು.

28 ಆಗ ಎಬೆದನ ಮಗನಾದ ಗಾಳನು, ''ನಾವು ಶೆಕೆಮಿನ
ಜನರು. ನಾವು ಅಬೀಮೆಲೆಕನ ಆಜ್ಞೆಗಳನ್ನು ಏಕೆ ಪಾಲಿಸ

ಬೇಕು? ಅವನು ತನ್ನನ್ನು ಯಾರೆಂದು ತಿಳಿದು
ಕೊಂಡಿದ್ದಾನೆ? ಅಬೀಮೆಲೆಕನು ಯೆರುಬ್ಬಾಳನ ಮಕ್ಕ
ಳಲ್ಲಿ ಒಬ್ಬನು. ಅದು ಸರಿಯಲ್ಲವೇ? ಅಬೀಮೆಲೆಕನು
ಜೆಬುಲನನ್ನು ತನ್ನ ಅಧಿಕಾರಿಯನ್ನಾಗಿ ನೇಮಿಸಿರುವುದೂ
ನಿಜವಲ್ಲವೇ? ನಾವು ಅಬೀಮೆಲೆಕನ ಆಜ್ಞೆ ಪಾಲಿಸುವುದು
ಬೇಡ. ನಾವು ನಮ್ಮ ಜನರಾದ ಹಮೋರನ ಸಂತತಿ
ಯವರ* ಆಜ್ಞೆಯನ್ನೇ ಪಾಲಿಸೋಣ. (ಹಮೋರನು
ಶೆಕೆಮನ ತಂದೆ.) [29]ನೀವು ನನಗೆ ಈ ಜನರ ಅಧಿಕಾರಿ
ಯನ್ನಾಗಿ ಮಾಡಿದರೆ, ನಾನು ಅಬೀಮೆಲೆಕನನ್ನು ನಾಶ
ಮಾಡುತ್ತೇನೆ. ನಾನು ಅವನಿಗೆ, ‘‘ನಿನ್ನ ಸೈನ್ಯವನ್ನು ಸಿದ್ಧ
ಪಡಿಸಿಕೊಂಡು ಯುದ್ಧಕ್ಕೆ ಬಾ’ ಎಂದು ಕರೆಯುತ್ತೇನೆ’’
ಎಂದನು. [30]ಜೆಬುಲನು ಶೆಕೆಮ್ ನಗರದ ಪುರಾಧಿಕಾರಿ
ಯಾಗಿದ್ದನು. ಎಬೆದನ ಮಗನಾದ ಗಾಳನ ಮಾತುಗಳನ್ನು
ಜೆಬುಲನು ಕೇಳಿ ಬಹಳ ಕೋಪಗೊಂಡನು.
[31]ಜೆಬುಲನು ಅರೂಮ ನಗರದಲ್ಲಿದ್ದ* ಅಬೀಮೆಲೆಕನ
ಬಳಿಗೆ ದೂತರನ್ನು ಕಳುಹಿಸಿದನು. ಅವನು ಕಳುಹಿಸಿದ
ಸಂದೇಶ ಹೀಗಿದೆ:

ಎಬೆದನ ಮಗನಾದ ಗಾಳನು ಮತ್ತು ಅವನ ಸಹೋದ
ರರು ಶೆಕೆಮ್ ನಗರಕ್ಕೆ ಬಂದಿದ್ದಾರೆ. ಅವರು ನಿನಗೆ
ತೊಂದರೆಯನ್ನು ಉಂಟುಮಾಡುತ್ತಿದ್ದಾರೆ. ಗಾಳನು
ಇಡೀ ನಗರವನ್ನು ನಿನ್ನ ವಿರುದ್ಧ ಎತ್ತಿಕಟ್ಟುತ್ತಿದ್ದಾನೆ.
[32]ಆದಕ್ಕಾಗಿ ನೀನು ಮತ್ತು ನಿನ್ನ ಜನರು ಈ ರಾತ್ರಿ ಬಂದು
ನಗರದ ಹೊರಗಡೆ ಹೊಲಗಳಲ್ಲಿ ಅಡಗಿಕೊಂಡಿರ
ಬೇಕು. [33]ಬೆಳಗಾಗಿ ಸೂರ್ಯನು ಮೇಲೇರಿದ ತರು
ವಾಯ ನಗರದ ಮೇಲೆ ಧಾಳಿಮಾಡಬೇಕು. ಗಾಳ ಮತ್ತು
ಅವನ ಜನರು ನಿನ್ನ ಸಂಗಡ ಯುದ್ಧ ಮಾಡುವುದಕ್ಕೆ ನಗರ
ದಿಂದ ಹೊರಗೆ ಬರುತ್ತಾರೆ. ಅವರು ಹೊರಗೆ ಬಂದಾಗ
ನಿನಗೆ ತೋರಿದಂತೆ ಅವರಿಗೆ ಮಾಡು.

[34]ಅಬೀಮೆಲೆಕ ಮತ್ತು ಅವನ ಸೈನಿಕರು ರಾತ್ರಿಯಲ್ಲಿ
ಎದ್ದು ನಗರಕ್ಕೆ ಹೋದರು. ಆ ಸೈನಿಕರು ತಮ್ಮನ್ನು ನಾಲ್ಕು
ಗುಂಪುಗಳನ್ನಾಗಿ ಮಾಡಿಕೊಂಡು ಶೆಕೆಮ್ ನಗರದ
ಹತ್ತಿರ ಅಡಗಿಕೊಂಡರು. [35]ಎಬೆದನ ಮಗನಾದ ಗಾಳನು
ಹೊರಗೆ ಹೋಗಿ ಶೆಕೆಮ್ ನಗರದ ಪ್ರವೇಶದ್ವಾರದಲ್ಲಿ
ನಿಂತಿದ್ದನು. ಗಾಳನು ಅಲ್ಲಿ ನಿಂತಿದ್ದಾಗ ಅಬೀಮೆಲೆಕ
ಮತ್ತು ಅವನ ಸೈನಿಕರು ತಾವು ಅಡಗಿದ್ದ ಸ್ಥಳಗಳನ್ನು ಬಿಟ್ಟು
ಹೊರಗೆ ಬಂದರು. [36]ಗಾಳನು ಸೈನಿಕರನ್ನು ನೋಡಿದನು.
ಗಾಳನು ಜೆಬುಲನಿಗೆ, ‘‘ಅಲ್ಲಿ ನೋಡು, ಬೆಟ್ಟ ಇಳಿದು
ಜನರು ಬರುತ್ತಿದ್ದಾರೆ’’ ಎಂದನು. ಆದರೆ ಜೆಬುಲನು,
‘‘ನೀನು ಕೇವಲ ಬೆಟ್ಟದ ನೆರಳನ್ನು ನೋಡುತ್ತಿರುವೆ;
ನೆರಳು ಜನರಂತೆ ಕಾಣಿಸುತ್ತಿದೆ’’ ಎಂದನು.

[37]ಆದರೆ ಪುನಃ ಗಾಳನು, ‘‘ಅಲ್ಲಿ ನೋಡು! ಕೆಲವು
ಜನರು ಭೂಮಿಯ ಮಧ್ಯದಿಂದ ಬರುತ್ತಿದ್ದಾರೆ. ಅಲ್ಲಿ ಆ
ಮಾಟಗಾರರ ಮರದ ಹತ್ತಿರ ಒಂದು ತಲೆಯನ್ನು
ನೋಡಿದೆ’’ ಎಂದನು. [38]ಆಗ ಜೆಬುಲನು ಗಾಳನಿಗೆ,
‘‘ನೀನು ಈಗೇಕೆ ಬಡಾಯಿಕೊಚ್ಚುತ್ತಾ ಇಲ್ಲ?
‘ಅಬೀಮೆಲೆಕನು ಯಾರು? ನಾವು ಅವನ ಆಜ್ಞೆಯನ್ನು
ಏಕೆ ಪಾಲಿಸಬೇಕು?’ ಎಂದು ನೀನು ಕೇಳಿದೆ. ನೀನು ಈ
ಜನರನ್ನು ತಮಾಷೆಮಾಡಿದೆ. ಈಗ ಹೊರಗೆ ಹೋಗಿ
ಅವರೊಂದಿಗೆ ಯುದ್ಧಮಾಡು’’ ಅಂದನು.

[39]ಅಬೀಮೆಲೆಕನೊಂದಿಗೆ ಯುದ್ಧಮಾಡಲು ಗಾಳನು
ಶೆಕೆಮಿನ ಹಿರಿಯರನ್ನು ನಗರದ ಹೊರಗಡೆ ಕರೆದು
ಕೊಂಡು ಹೋದನು. [40]ಅಬೀಮೆಲೆಕನು ಮತ್ತು ಅವನ
ಜನರು ಗಾಳ ಮತ್ತು ಅವನ ಜನರನ್ನು ಬೆನ್ನಟ್ಟಿದರು.
ಗಾಳನ ಜನರು ಹಿಂದಿರುಗಿ ಶೆಕೆಮ್ ನಗರದ ದ್ವಾರದ
ಕಡೆಗೆ ಓಡಿದರು. ದ್ವಾರಕ್ಕೆ ಮುಟ್ಟುವ ಮೊದಲೇ ಗಾಳನ
ಹಲವಾರು ಜನ ಹತರಾದರು.

[41]ಅನಂತರ ಅಬೀಮೆಲೆಕನು ಅರೂಮ ನಗರಕ್ಕೆ
ಹಿಂದಿರುಗಿದನು. ಜೆಬುಲನು ಗಾಳನನ್ನು ಮತ್ತು ಅವನ
ಸಹೋದರರನ್ನು ಶೆಕೆಮ್ ನಗರದಿಂದ ಓಡಿಸಿಬಿಟ್ಟನು.

[42]ಮರುದಿನ ಶೆಕೆಮಿನ ಜನರು ಹೊಲಗಳಲ್ಲಿ ಕೆಲಸ
ಮಾಡಲು ಹೋದರು. ಅಬೀಮೆಲೆಕನಿಗೆ ಅದು ಗೊತ್ತಾ
ಯಿತು. [43]ಅಬೀಮೆಲೆಕನು ತನ್ನ ಸೈನ್ಯವನ್ನು ಮೂರು
ಗುಂಪುಗಳಾಗಿ ವಿಂಗಡಿಸಿದನು. ಅವನು ಶೆಕೆಮಿನ ಜನರ
ಮೇಲೆ ಹಠಾತ್ತನೆ ಧಾಳಿ ಮಾಡಬಯಸಿದ್ದನು. ಆದುದ
ರಿಂದ ಅವನು ತನ್ನ ಜನರನ್ನು ಹೊಲಗಳಲ್ಲಿ ಅಡಗಿ
ಸಿಟ್ಟನು. ನಗರದಿಂದ ಜನರು ಹೊರಗೆ ಬರುವುದನ್ನು
ನೋಡಿದ ತಕ್ಷಣ ಅವನು ನೆಗೆದೆದ್ದು ಅವರ ಮೇಲೆ ಧಾಳಿ
ಮಾಡಿದನು. [44]ಅಬೀಮೆಲೆಕ ಮತ್ತು ಅವನ ಗುಂಪಿನವರು
ಓಡಿಕೊಂಡು ಶೆಕೆಮ್ ನಗರದ ಬಾಗಿಲಿನ ಹತ್ತಿರ ಒಂದು
ಸ್ಥಳಕ್ಕೆ ಬಂದರು. ಉಳಿದ ಎರಡು ಗುಂಪಿನವರು ಹೊಲ
ಗಳಲ್ಲಿದ್ದ ಜನರ ಕಡೆಗೆ ಓಡಿಹೋಗಿ ಅವರನ್ನು ಕೊಂದು
ಹಾಕಿದರು. [45]ಆ ಇಡೀ ದಿವಸ ಅಬೀಮೆಲೆಕ ಮತ್ತು ಅವನ
ಜನರು ಶೆಕೆಮಿನ ಜನರೊಂದಿಗೆ ಯುದ್ಧ ಮಾಡಿದರು.
ಅಬೀಮೆಲೆಕ ಮತ್ತು ಅವನ ಜನರು ಶೆಕೆಮ್ ನಗರವನ್ನು
ಸ್ವಾಧೀನಪಡಿಸಿಕೊಂಡರು; ಆ ನಗರದ ಜನರನ್ನು
ಕೊಂದುಹಾಕಿದರು. ಅಬೀಮೆಲೆಕನು ಊರನ್ನು ಕೆಡವಿ
ಹಾಕಿ ಉಪ್ಪನ್ನು ಚೆಲ್ಲಿದನು. [46]ಶೆಕೆಮಿನ ಬುರುಜಿನ ಮೇಲೆ
ಕೆಲವು ಜನರು ವಾಸ ಮಾಡುತ್ತಿದ್ದರು. ಶೆಕೆಮಿನಲ್ಲಿ ನಡೆದ
ಘಟನೆಯ ಬಗ್ಗೆ ಕೇಳಿ ಅವರು ಏಲ್‌ಬೆರೀತ್
ದೇವರಗುಡಿಯ ಅತಿ ಸುರಕ್ಷಿತವಾದ ಕೋಣೆಯಲ್ಲಿ
ಒಟ್ಟುಗೂಡಿದರು.

---

**ಹಮೋರನ ಸಂತತಿಯವರು** ಶೆಕೆಮಿನ ನಿವಾಸಿಗಳು. ಹಮೋರನು ಶೆಕೆಮನ ತಂದೆ. ಶೆಕೆಮ್ ನಗರಕ್ಕೆ ಹಮೋರನ ಮಗನ ಹೆಸರು ಇಡಲಾಗಿದೆ.

**ಅರೂಮ ನಗರ** ಅಥವಾ ‘‘ತೊರಮಾ’’ ಅಬೀಮೆಲೆಕನು ಅರಸನಾಗಿದ್ದ ನಗರ. ಶೆಕೆಮಿನ ದಕ್ಷಿಣಕ್ಕೆ 8 ಮೈಲಿ ಮೇಲೆ ಇದ್ದಿರಬಹುದು.

47ಶೆಕೆಮ್ ಬುರುಜಿನ* ಎಲ್ಲ ಹಿರಿಯರು ಒಟ್ಟಿಗೆ ಸೇರಿ
ದ್ದಾರೆ ಎಂಬ ಸಂಗತಿಯನ್ನು ಅಬೀಮೆಲೆಕನು ಕೇಳಿದನು.
48ಆದುದರಿಂದ ಅಬೀಮೆಲೆಕ ಮತ್ತು ಅವನ ಜನರು
ಚಲ್ಮೋನ್* ಬೆಟ್ಟವನ್ನು ಹತ್ತಿಹೋದರು. ಅಬೀಮೆಲೆ
ಕನು ಒಂದು ಕೊಡಲಿಯನ್ನು ತೆಗೆದುಕೊಂಡು ಕೆಲವು
ಕೊಂಬೆಗಳನ್ನು ಕಡಿದನು. ಅವನು ಆ ಕೊಂಬೆಗಳನ್ನು
ಹೊತ್ತುಕೊಂಡು ಹೊರಟನು. ಅಬೀಮೆಲೆಕನು ತನ್ನ
ಸಂಗಡಿಗರಿಗೆ, ‘‘ನಾನು ಮಾಡಿದಂತೆಯೇ ನೀವು ಬೇಗನೆ
ಮಾಡಿರಿ’’ ಎಂದನು. 49ಆದುದರಿಂದ ಅವರೆಲ್ಲರೂ
ಕೊಂಬೆಗಳನ್ನು ಕಡಿದುಕೊಂಡು ಅವನನ್ನು ಹಿಂಬಾಲಿ
ಸಿದರು. ಅವರು ಏಲ್ ಬೆರೀತ್* ದೇವರಗುಡಿಯ ಅತೀ
ಸುರಕ್ಷಿತವಾದ ಕೋಣೆಯ* ಸುತ್ತಲೂ ಆ ಕೊಂಬೆ
ಗಳನ್ನು ಇಟ್ಟರು. ತರುವಾಯ ಆ ಕೊಂಬೆಗಳಿಗೆ ಬೆಂಕಿ
ಹಚ್ಚಿ ಆ ಕೋಣೆಯಲ್ಲಿದ್ದ ಎಲ್ಲರನ್ನು ಸುಟ್ಟುಬಿಟ್ಟರು.
ಶೆಕೆಮಿನ ಬುರುಜಿನಲ್ಲಿದ್ದ ಒಂದು ಸಾವಿರ ಗಂಡಸರು
ಮತ್ತು ಹೆಂಗಸರು ಸತ್ತುಹೋದರು.

### ಅಬೀಮೆಲೆಕನ ಮರಣ

50ಅನಂತರ ಅಬೀಮೆಲೆಕನು ಮತ್ತು ಅವನ ಜನರು
ತೇಬೇಚ ನಗರಕ್ಕೆ ಹೋಗಿ ಅದನ್ನು ಸ್ವಾಧೀನ ಪಡಿಸಿ
ಕೊಂಡರು. 51ಆದರೆ ಆ ನಗರದ ಒಳಭಾಗದಲ್ಲಿ ಒಂದು
ಭದ್ರವಾದ ಗೋಪುರವಿತ್ತು. ಆ ನಗರದ ಎಲ್ಲ ಹಿರಿಯರು
ಮತ್ತು ಉಳಿದ ಗಂಡಸರು ಮತ್ತು ಹೆಂಗಸರು ಅಲ್ಲಿಗೆ ಓಡಿ
ಹೋದರು. ಅವರು ಗೋಪುರದೊಳಗೆ ಹೋಗಿ ಒಳಗಿ
ನಿಂದ ಬೀಗ ಹಾಕಿಕೊಂಡರು; ಬಳಿಕ ಗೋಪುರದ ಮಾಳಿ
ಗೆಯ ಮೇಲೆ ಹತ್ತಿದರು. 52ಅಬೀಮೆಲೆಕನು ಮತ್ತು ಅವನ
ಜನರು ಅದರ ಮೇಲೆ ಧಾಳಿಮಾಡಲು ಗೋಪುರದ ಬಳಿ
ಬಂದರು. ಅಬೀಮೆಲೆಕನು ಆ ಗೋಪುರದ ಬಾಗಿಲಿನ
ವರೆಗೆ ಹೋದನು. ಅವನು ಆ ಗೋಪುರವನ್ನು ಸುಡ
ಬೇಕೆಂದಿದ್ದನು. 53ಆದರೆ ಅಬೀಮೆಲೆಕನು ಆ ಗೋಪು
ರದ ಬಾಗಿಲಿನ ಹತ್ತಿರ ನಿಂತಿದ್ದಾಗ ಮಾಳಿಗೆಯ ಮೇಲಿದ್ದ
ಒಬ್ಬ ಸ್ತ್ರೀಯು ಅವನ ತಲೆಯ ಮೇಲೆ ಒಂದು ಬೀಸುವ
ಕಲ್ಲನ್ನು ಹಾಕಿದಳು. ಆ ಬೀಸುವಕಲ್ಲು ಅಬೀಮೆಲೆಕನ
ತಲೆ ಬುರುಡೆಯನ್ನು ಒಡೆಯಿತು. 54ಕೂಡಲೆ
ಅಬೀಮೆಲೆಕನು ತನ್ನ ಆಯುಧವಾಹಕನಿಗೆ, ‘‘ನಿನ್ನ
ಖಡ್ಗವನ್ನು ಹೊರತೆಗೆದು ನನ್ನನ್ನು ಕೊಂದುಬಿಡು. ‘ಒಬ್ಬ
ಹೆಂಗಸು ಅಬೀಮೆಲೆಕನನ್ನು ಕೊಂದಳು’ ಎಂದು ಜನರು
ಹೇಳಬಾರದು. ಅದಕ್ಕಾಗಿ ನೀನು ನನ್ನನ್ನು ಕೊಲ್ಲ
ಬೇಕೆಂದು ನನ್ನ ಇಚ್ಛೆ’’ ಎಂದನು. ಆದುದರಿಂದ ಆ
ಸೇವಕನು ಅಬೀಮೆಲೆಕನನ್ನು ತನ್ನ ಕತ್ತಿಯಿಂದ ಇರಿದನು;
ಅಬೀಮೆಲೆಕನು ಸತ್ತನು. 55ಅಬೀಮೆಲೆಕನು ಸತ್ತಿದ್ದನ್ನು
ಇಸ್ರೇಲರು ನೋಡಿದರು. ಆದುದರಿಂದ ಅವರೆಲ್ಲರೂ
ತಮ್ಮ ತಮ್ಮ ಸ್ಥಳಗಳಿಗೆ ಹಿಂದಿರುಗಿದರು.

56ಅಬೀಮೆಲೆಕನು ತನ್ನ ತಂದೆಗೆ ವಿರೋಧವಾಗಿ
ಮಾಡಿದ್ದ ಎಲ್ಲ ದುಷ್ಕೃತ್ಯಗಳಿಗಾಗಿ ಅಂದರೆ ತನ್ನ ಎಪ್ಪತ್ತು
ಮಂದಿ ಸಹೋದರರನ್ನು ಕೊಂದುಹಾಕಿದ್ದರಿಂದ
ದೇವರು ಅವನನ್ನು ಹೀಗೆ ದಂಡಿಸಿದನು. 57ದೇವರು
ಶೆಕೆಮ್ ನಗರದ ಜನರನ್ನೂ ಸಹ ಅವರು ಮಾಡಿದ
ದುಷ್ಕೃತ್ಯಗಳಿಗಾಗಿ ದಂಡಿಸಿದನು. ಹೀಗೆ ಯೋತಾಮನು
ನುಡಿದಂತೆಯೇ ಆಯಿತು. (ಯೋತಾಮನು ಯೆರುಬ್ಬಾ
ಳನ ಕಿರಿಯ ಮಗ. ಯೆರುಬ್ಬಾಳ ಅಂದರೆ ಗಿದ್ಯೋನ.)

### ನ್ಯಾಯಾಧೀಶನಾದ ತೋಲ

10 ಅಬೀಮೆಲೆಕನು ಸತ್ತ ತರುವಾಯ ಇಸ್ರೇಲರನ್ನು
ರಕ್ಷಿಸಲು ಯೆಹೋವನು ಮತ್ತೊಬ್ಬ ನ್ಯಾಯಾ
ಧೀಶನನ್ನು ಕಳುಹಿಸಿದನು. ಅವನ ಹೆಸರು ತೋಲ.
ತೋಲನು ಪೂವನ ಮಗನು. ಪೂವನು ದೋದೋ
ಎಂಬವನ ಮಗನು. ತೋಲನು ಇಸ್ಸಾಕಾರ್ ಕುಲಕ್ಕೆ ಸೇರಿ
ದವನೂ ಶಾಮೀರ ನಗರದವಾಸಿಯೂ ಆಗಿದ್ದನು.
ಶಾಮೀರ ನಗರವು ಎಫ್ರಾಯೀಮ್ ಬೆಟ್ಟಪ್ರದೇಶ
ದಲ್ಲಿತ್ತು. 2ತೋಲನು ಇಪ್ಪತ್ತಮೂರು ವರುಷಗಳವರೆಗೆ
ಇಸ್ರೇಲರ ನ್ಯಾಯಾಧೀಶನಾಗಿದ್ದನು. ಆಮೇಲೆ
ತೋಲನು ಮರಣ ಹೊಂದಿದನು. ಶಾಮೀರಿನಲ್ಲಿ ಅವನ
ಸಮಾಧಿ ಮಾಡಲಾಯಿತು.

### ನ್ಯಾಯಾಧೀಶನಾದ ಯಾಯೀರ

3ತೋಲನ ಮರಣದ ತರುವಾಯ ಯೆಹೋವನು
ಮತ್ತೊಬ್ಬ ನ್ಯಾಯಾಧೀಶನನ್ನು ಕಳುಹಿಸಿದನು. ಅವನ
ಹೆಸರು ಯಾಯೀರ. ಯಾಯೀರನು ಗಿಲ್ಯಾದ್ ಪ್ರದೇಶ
ದಲ್ಲಿ ವಾಸವಾಗಿದ್ದನು. ಯಾಯೀರನು ಇಪ್ಪತ್ತೆರಡು
ವರ್ಷ ಇಸ್ರೇಲರ ನ್ಯಾಯಾಧೀಶನಾಗಿದ್ದನು.
4ಯಾಯೀರನಿಗೆ ಮೂವತ್ತು ಗಂಡುಮಕ್ಕಳಿದ್ದರು.
ಅವರು ಮೂವತ್ತು ಕತ್ತೆಗಳ ಮೇಲೆ ಸವಾರಿ ಮಾಡುತ್ತಿ
ದ್ದರು.* ಆ ಮೂವತ್ತು ಮಂದಿ ಗಂಡುಮಕ್ಕಳು ಗಿಲ್ಯಾದ್

**ಶೆಕೆಮಿನ ಬುರುಜು** ಬಹುಶಃ ಇದು ಶೆಕೆಮಿನ ಹತ್ತಿರದ ಸ್ಥಳವಾಗಿರಬಹುದು. ಶೆಕೆಮಿನ ಒಂದು ಭಾಗವಲ್ಲ.

**ಚಲ್ಮೋನ್ ಬೆಟ್ಟ** ಇದು ಶೆಕೆಮಿನ ಹತ್ತಿರ ಇದ್ದ ಏಬಾಲ್ ಬೆಟ್ಟದ ಇನ್ನೊಂದು ಹೆಸರಾಗಿರಬಹುದು.

**ಏಲ್ ಬೆರೀತ್** ಈ ದೇವರ ಹೆಸರಿನ ಅರ್ಥ ‘‘ಒಡಂಬಡಿಕೆಯ ದೇವರು.’’

**ಅತಿಸುರಕ್ಷಿತವಾದ ಕೋಣೆ** ಇಲ್ಲಿ ಪ್ರಯೋಗಿಸಿದ ಹೀಬ್ರೂ ಶಬ್ದದ ಅರ್ಥ ಖಚಿತವಾಗಿ ತಿಳಿದಿಲ್ಲ.

**ಮೂವತ್ತು ಕತ್ತೆಗಳ ಮೇಲೆ ಸವಾರಿ ಮಾಡುತ್ತಿದ್ದರು** ಇದು ಈ ಜನರು ಪ್ರಮುಖನಾಯಕರು ಎಂಬುದನ್ನು ತೋರಿಸುತ್ತದೆ. ಗಿಲ್ಯಾದಿನಲ್ಲಿ ಮೂವತ್ತು ಪಟ್ಟಣಗಳ ಮಹಾ ಪೌರರಾಗಿದ್ದಿರಬಹುದು.

ಪ್ರದೇಶದಲ್ಲಿ ಮೂವತ್ತು ಪಟ್ಟಣಗಳನ್ನು ತಮ್ಮ ಅಧೀನ
ದಲ್ಲಿಟ್ಟುಕೊಂಡಿದ್ದರು. ಅವುಗಳಿಗೆ ಇಂದಿನವರೆಗೂ
ಯಾಯೀರನ ಪಟ್ಟಣಗಳೆಂದು ಹೆಸರಿದೆ.
5ಯಾಯೀರನು ಸತ್ತನು, ಅವನನ್ನು ಕಾಮೋನಿನಲ್ಲಿ
ಹೂಣಿಟ್ಟರು.

### ಇಸ್ರೇಲರ ವಿರುದ್ಧ ಅಮ್ಮೋನಿಯರ ಯುದ್ಧ

6ಇಸ್ರೇಲರು ಮತ್ತೆ ದೇವರಿಗೆ ವಿರೋಧವಾಗಿ ದುಷ್ಕೃತ್ಯ
ಗಳನ್ನು ಮಾಡಿದರು. ಅವರು ಸುಳ್ಳುದೇವರಾದ ಬಾಳ
ನನ್ನು ಸುಳ್ಳುದೇವತೆಯಾದ ಅಷ್ಟೋರೆತಳನ್ನೂ ಪೂಜಿಸ
ತೊಡಗಿದರು. ಅವರು ಅರಾಮ್ಯರ, ಚೀದೋನ್ಯರ,
ಮೋವಾಬ್ಯರ, ಅಮ್ಮೋನಿಯರ ಮತ್ತು ಫಿಲಿಷ್ಟಿಯರ
ದೇವರುಗಳನ್ನು ಸಹ ಪೂಜಿಸಿದರು. ಇಸ್ರೇಲರು
ಯೆಹೋವನನ್ನು ಮರೆತುಬಿಟ್ಟು ಆತನ ಸೇವೆಯನ್ನು
ನಿಲ್ಲಿಸಿಬಿಟ್ಟರು.
7ಆದುದರಿಂದ ಯೆಹೋವನು ಇಸ್ರೇಲರ ಮೇಲೆ
ಕೋಪಗೊಂಡನು. ಫಿಲಿಷ್ಟಿಯರು ಮತ್ತು ಅಮ್ಮೋನಿ
ಯರು ಅವರನ್ನು ಸೋಲಿಸುವಂತೆ ಮಾಡಿದನು. 8ಅದೇ
ವರ್ಷ ಅವರು ಜೋರ್ಡನ್ ನದಿಯ ಪೂರ್ವಕ್ಕಿರುವ
ಗಿಲ್ಯಾದಿನಲ್ಲಿದ್ದ ಇಸ್ರೇಲರನ್ನು ನಾಶಮಾಡಿದರು. ಅದು
ಮೊದಲು ಅಮೋರಿಯರ ಪ್ರದೇಶವಾಗಿತ್ತು. ಇಸ್ರೇಲರು
ಹದಿನೆಂಟು ವರ್ಷಗಳವರೆಗೆ ಕಷ್ಟವನ್ನು ಅನುಭವಿಸಿದರು.
9ಅಮ್ಮೋನಿಯರು ಜೋರ್ಡನ್ ನದಿಯನ್ನು ದಾಟಿ
ಯೆಹೂದ, ಬೆನ್ಯಾಮೀನ್, ಎಫ್ರಾಯೀಮ್ ಕುಲಗಳ
ಜನರೊಡನೆ ಯುದ್ಧ ಮಾಡಿದರು. ಅಮ್ಮೋನಿಯರು,
ಇಸ್ರೇಲರಿಗೆ ಅನೇಕ ಕಷ್ಟಗಳನ್ನು ಕೊಟ್ಟರು.
10ಆಗ ಇಸ್ರೇಲರು ಸಹಾಯಕ್ಕಾಗಿ ಯೆಹೋವನಿಗೆ
ಮೊರೆಯಿಟ್ಟರು. ಅವರು, ''ನಾವು ನಿನ್ನ ವಿರುದ್ಧವಾಗಿ
ಪಾಪ ಮಾಡಿದ್ದೇವೆ. ನಾವು ನಮ್ಮ ದೇವರನ್ನು ಬಿಟ್ಟು
ಸುಳ್ಳುದೇವರಾದ ಬಾಳನನ್ನು ಪೂಜಿಸಿದ್ದೇವೆ''ಎಂದು
ಮರುಗಿದರು.
11ಯೆಹೋವನು ಇಸ್ರೇಲರಿಗೆ, ''ಈಜಿಪ್ಟಿನವರು,
ಅಮೋರಿಯರು, ಅಮ್ಮೋನಿಯರು, ಮತ್ತು ಫಿಲಿಷ್ಟಿ
ಯರು ನಿಮ್ಮನ್ನು ಪೀಡಿಸಿದಾಗ ನೀವು ನನಗೆ ಮೊರೆ
ಯಿಟ್ಟಿರಿ. ನಾನು ನಿಮ್ಮನ್ನು ಅವರಿಂದ ರಕ್ಷಿಸಿದೆ.
12ಚೀದೋನ್ಯರು, ಅಮಾಲೇಕ್ಯರು, ಮಿದ್ಯಾನ್ಯರು*
ನಿಮ್ಮನ್ನು ಪೀಡಿಸಿದಾಗ ನನಗೆ ಮೊರೆಯಿಟ್ಟಿರಿ. ಅವ
ರಿಂದಲೂ ನಾನು ನಿಮ್ಮನ್ನು ರಕ್ಷಿಸಿದೆ. 13ಆದರೆ ನೀವು
ನನ್ನನ್ನು ತ್ಯಜಿಸಿದಿರಿ. ನೀವು ಬೇರೆ ದೇವರುಗಳನ್ನು ಪೂಜಿ
ಸಿದಿರಿ. ಆದುದರಿಂದ ನಾನು ಮತ್ತೆ ನಿಮ್ಮನ್ನು ರಕ್ಷಿಸುವು
ದಿಲ್ಲ. 14ನೀವು ಆ ದೇವರುಗಳನ್ನು ಪೂಜಿಸಲು ಇಷ್ಟ
ಪಡುತ್ತೀರಿ. ಆದುದರಿಂದ ಹೋಗಿ ಅವರನ್ನೇ ಸಹಾಯ
ಕ್ಕಾಗಿ ಮೊರೆಯಿಡಿ. ನೀವು ಕಷ್ಟದಲ್ಲಿರುವಾಗ ಆ ದೇವತೆ
ಗಳೇ ನಿಮ್ಮನ್ನು ರಕ್ಷಿಸಲಿ'' ಎಂದು ಉತ್ತರಿಸಿದನು.
15ಆದರೆ ಇಸ್ರೇಲರು ಯೆಹೋವನಿಗೆ, ''ನಾವು ಪಾಪ
ಮಾಡಿದ್ದೇವೆ. ನಿನಗೆ ಸರಿಯೆನಿಸಿದಂತೆ ಮಾಡು. ಆದರೆ
ದಯವಿಟ್ಟು ಇಂದು ನಮ್ಮನ್ನು ರಕ್ಷಿಸು'' ಎಂದು ಪ್ರಾರ್ಥಿಸಿ
ದರು. 16ಆಗ ಇಸ್ರೇಲರು ಅನ್ಯದೇವರುಗಳನ್ನು ತೊರೆದು
ಯೆಹೋವನನ್ನು ಆರಾಧಿಸಲು ಆರಂಭಿಸಿದರು. ಅವರು
ಕಷ್ಟಪಡುತ್ತಿರುವುದನ್ನು ನೋಡಿ ಯೆಹೋವನು ಮರುಕ
ಪಟ್ಟನು.

### ಯೆಫ್ತಾಹನನ್ನು ನಾಯಕನನ್ನಾಗಿ ಆರಿಸಲಾಯಿತು

17ಅಮ್ಮೋನಿಯರು ಯುದ್ಧಕ್ಕೆಂದು ಒಂದೆಡೆ ಸೇರಿ
ದರು. ಅವರು ಗಿಲ್ಯಾದ್‌ನಲ್ಲಿ ಪಾಳೆಯ ಮಾಡಿಕೊಂಡಿ
ದ್ದರು. ಇಸ್ರೇಲರು ಒಂದೆಡೆ ಸೇರಿಕೊಂಡರು. ಅವರ
ಪಾಳೆಯವು ಮಿಚ್ಪೆಯಲ್ಲಿ ಇತ್ತು. 18ಗಿಲ್ಯಾದ್ ಕ್ಷೇತ್ರದಲ್ಲಿ
ವಾಸಮಾಡುತ್ತಿದ್ದ ಜನನಾಯಕರು, ''ಅಮ್ಮೋನಿಯರ
ಮೇಲೆ ಧಾಳಿಮಾಡಲು ಯಾರು ನಮ್ಮ ಮುಂದಾಳಾಗು
ತ್ತಾರೋ ಆ ವ್ಯಕ್ತಿಯೇ ಗಿಲ್ಯಾದ್ ಕ್ಷೇತ್ರದಲ್ಲಿ ವಾಸ
ಮಾಡುವ ಜನರೆಲ್ಲರಿಗೂ ನಾಯಕನಾಗುತ್ತಾನೆ'' ಎಂದು
ಸಾರಿದರು.

11 ಯೆಫ್ತಾಹನು ಗಿಲ್ಯಾದ್ ಕುಲದವನಾಗಿದ್ದನು.
ಅವನು ಪರಾಕ್ರಮಶಾಲಿಯಾಗಿದ್ದನು. ಆದರೆ
ಯೆಫ್ತಾಹನು ಒಬ್ಬ ವೇಶ್ಯೆಯ ಮಗನಾಗಿದ್ದನು. ಅವನ
ತಂದೆಯ ಹೆಸರು ಗಿಲ್ಯಾದ್. 2ಗಿಲ್ಯಾದನ ಹೆಂಡತಿಗೆ
ಅನೇಕ ಜನ ಮಕ್ಕಳಿದ್ದರು. ಆ ಮಕ್ಕಳು ದೊಡ್ಡವರಾದ
ಮೇಲೆ ಯೆಫ್ತಾಹನನ್ನು ಇಷ್ಟಪಡಲಿಲ್ಲ. ಯೆಫ್ತಾಹನು ತನ್ನ
ಹುಟ್ಟೂರನ್ನು ಬಿಡುವಂತೆ ಆ ಮಕ್ಕಳು ಒತ್ತಾಯ ಮಾಡಿ
ದರು. ಅವರು ಅವನಿಗೆ, ''ನೀನು ನಮ್ಮ ತಂದೆಯ ಆಸ್ತಿ
ಯಲ್ಲಿ ಯಾವ ಭಾಗವನ್ನೂ ಪಡೆಯಲಾರೆ. ನೀನು
ವೇಶ್ಯೆಯ ಮಗ'' ಎಂದು ಹೇಳಿದರು. 3ಯೆಫ್ತಾಹನು ತನ್ನ
ಸಹೋದರರ ಬಳಿಯಿಂದ ಓಡಿಹೋಗಿ ಟೋಬ್ ದೇಶ
ದಲ್ಲಿ ವಾಸಮಾಡತೊಡಗಿದನು. ಟೋಬ್ ದೇಶದಲ್ಲಿ
ಕೆಲವು ಪುಂಡರು ಯೆಫ್ತಾಹನ ಜೊತೆ ಸೇರಿಕೊಂಡರು.
4ಸ್ವಲ್ಪಕಾಲದ ತರುವಾಯ ಅಮ್ಮೋನಿಯರು
ಇಸ್ರೇಲರ ವಿರುದ್ಧ ಯುದ್ಧ ಪ್ರಾರಂಭಿಸಿದರು.
5ಅಮ್ಮೋನಿಯರು ಯುದ್ಧ ಪ್ರಾರಂಭಿಸಿದ ತರುವಾಯ
ಗಿಲ್ಯಾದಿನ ನಾಯಕರು ಯೆಫ್ತಾಹನ ಹತ್ತಿರ ಹೋದರು.
ಯೆಫ್ತಾಹನು ಟೋಬ್ ದೇಶವನ್ನು ಬಿಟ್ಟು ಗಿಲ್ಯಾದಿಗೆ
ಬರಬೇಕೆಂಬುದು ಅವರ ಅಪೇಕ್ಷೆಯಾಗಿತ್ತು.

---

**ಮಿದ್ಯಾನ್ಯರು** ಗ್ರೀಕ್ ಭಾಷಾಂತರಗಳಲ್ಲಿ ''ಮಿದ್ಯಾನ್ಯರು'' ಎಂದು
ಇದೆ. ಹೀಬ್ರೂವಿನಲ್ಲಿ ''ಮಾವೋನ್ಯರು'' ಎಂದು ಇದೆ.

6ಆ ಹಿರಿಯರು ಯೆಫ್ತಾಹನಿಗೆ, ‘‘ನಾವು ಅಮ್ಮೋನಿಯ
ರೊಡನೆ ಮಾಡುವ ಯುದ್ಧದಲ್ಲಿ ನೀನೇ ನಮ್ಮ ನಾಯಕ
ನಾಗು’’ ಎಂದು ಬೇಡಿಕೊಂಡರು.

7ಆದರೆ ಗಿಲ್ಯಾದಿನ ಹಿರಿಯರಿಗೆ ಯೆಫ್ತಾಹನು, ‘‘ನನ್ನ
ತಂದೆಯ ಮನೆಯನ್ನು ಬಿಡುವಂತೆ ನೀವು ನನಗೆ ಒತ್ತಾಯ
ಮಾಡಿದಿರಿ; ನೀವು ನನ್ನನ್ನು ದ್ವೇಷಿಸುತ್ತೀರಿ. ಆದರೆ
ಕಷ್ಟದಲ್ಲಿ ನೀವು ನನ್ನ ಬಳಿಗೆ ಬರುವುದೇಕೆ?’’ ಎಂದು
ಕೇಳಿದನು.

8ಗಿಲ್ಯಾದಿನ ಹಿರಿಯರು ಯೆಫ್ತಾಹನಿಗೆ, ‘‘ಕಷ್ಟ
ಬಂದಿರುವುದರಿಂದಲೇ ನಿನ್ನಲ್ಲಿಗೆ ಬಂದಿದ್ದೇವೆ. ದಯ
ವಿಟ್ಟು ನಮ್ಮೊಡನೆ ಬಾ; ಅಮ್ಮೋನಿಯರ ವಿರುದ್ಧ ಯುದ್ಧ
ಮಾಡು. ಗಿಲ್ಯಾದಿನಲ್ಲಿ ವಾಸಮಾಡುತ್ತಿರುವ ಜನರೆ
ಲ್ಲರಿಗೂ ನೀನು ಅಧಿಪತಿಯಾಗುವೆ’’ ಅಂದರು.

9ಆಗ ಯೆಫ್ತಾಹನು ಗಿಲ್ಯಾದಿನ ಹಿರಿಯರಿಗೆ, ‘‘ನಾನು
ಗಿಲ್ಯಾದಿಗೆ ಹಿಂದಿರುಗಿ ಬಂದು ಅಮ್ಮೋನಿಯರ ವಿರುದ್ಧ
ಯುದ್ಧಮಾಡಬೇಕೆಂದು ನೀವು ಅಪೇಕ್ಷಿಸುವುದೇನೋ
ಒಳ್ಳೆಯದು. ಆದರೆ ಯೆಹೋವನ ಕೃಪೆಯಿಂದ ನಾನು
ಗೆದ್ದರೆ ನಾನು ನಿಮಗೆ ಹೊಸ ನಾಯಕನಾಗುತ್ತೇನೆ’’
ಎಂದನು.

10ಗಿಲ್ಯಾದಿನ ಹಿರಿಯರು ಯೆಫ್ತಾಹನಿಗೆ, ‘‘ನಾವು
ಹೇಳುತ್ತಿರುವ ಎಲ್ಲವನ್ನು ಯೆಹೋವನು ಕೇಳುತ್ತಿದ್ದಾನೆ.
ನೀನು ಹೇಳಿದಂತೆಯೇ ಮಾಡುತ್ತೇವೆ ಎಂದು ನಾವು
ಮಾತುಕೊಡುತ್ತೇವೆ’’ ಎಂದರು.

11ಯೆಫ್ತಾಹನು ಗಿಲ್ಯಾದಿನ ಹಿರಿಯರ ಸಂಗಡ
ಹೊರಟುಹೋದನು. ಅವರು ಯೆಫ್ತಾಹನನ್ನು ತಮ್ಮ
ನಾಯಕನನ್ನಾಗಿಯೂ ಸೇನಾಧಿಪತಿಯನ್ನಾಗಿಯೂ
ಮಾಡಿದರು. ಯೆಫ್ತಾಹನು ಮಿಚ್ಪೆ ನಗರದಲ್ಲಿ
ಯೆಹೋವನ ಸಮ್ಮುಖದಲ್ಲಿ ತನ್ನ ಎಲ್ಲಾ ಮಾತುಗಳನ್ನು
ಮತ್ತೊಮ್ಮೆ ಹೇಳಿದನು.

### ಅಮ್ಮೋನಿಯರ ಅರಸನಲ್ಲಿಗೆ ಯೆಫಾಹನು ದೂತರನ್ನು ಕಳುಹಿಸಿದನು

12ಯೆಫ್ತಾಹನು ಅಮ್ಮೋನಿಯರ ಅರಸನಿಗೆ ತನ್ನ
ದೂತರ ಮೂಲಕ, ‘‘ಅಮ್ಮೋನಿಯರ ಮತ್ತು ಇಸ್ರೇಲರ
ಮಧ್ಯೆ ಯಾವ ಸಮಸ್ಯೆ ಇದೆ? ನೀವು ನಮ್ಮ ದೇಶದಲ್ಲಿ
ಯುದ್ಧ ಮಾಡಲು ಏಕೆ ಬಂದಿರುವಿರಿ?’’ ಎಂಬ ಸಂದೇಶ
ವನ್ನು ಕಳುಹಿಸಿದನು. 13ಅಮ್ಮೋನಿಯರ ಅರಸನು
ಯೆಫ್ತಾಹನ ದೂತರಿಗೆ, ‘‘ಇಸ್ರೇಲರು ಈಜಿಪ್ಟಿನಿಂದ
ಬಂದಾಗ ನಮ್ಮ ಪ್ರದೇಶವನ್ನು ತೆಗೆದುಕೊಂಡರು; ಆದ್ದ
ರಿಂದ ಈಗ ನಾವು ಇಸ್ರೇಲರೊಂದಿಗೆ ಯುದ್ಧ ಮಾಡುತ್ತಿ
ದ್ದೇವೆ. ಅವರು ಅರ್ನೋನ್ ನದಿಯಿಂದ ಯಬ್ಬೋಕ್
ನದಿಯವರೆಗೂ ಜೋರ್ಡನ್ ನದಿಯವರೆಗಿನ ಭೂಮಿ
ಯನ್ನೂ ತೆಗೆದುಕೊಂಡಿದ್ದಾರೆ. ಈಗ ನಮ್ಮ ಭೂಮಿ
ಯನ್ನು ನಮಗೆ ಶಾಂತಿಯಿಂದ ಹಿಂದಿರುಗಿಸಬೇಕು’’
ಎಂದನು.

14ಯೆಫ್ತಾಹನ ದೂತರು ಈ ಸಂದೇಶವನ್ನು ಯೆಫ್ತಾಹ
ನಿಗೆ ಮುಟ್ಟಿಸಿದರು. ಆಗ ಯೆಫ್ತಾಹನು ಮತ್ತೊಮ್ಮೆ
ಅಮ್ಮೋನಿಯರ ಅರಸನಲ್ಲಿಗೆ ದೂತರನ್ನು ಕಳುಹಿಸಿದನು.
15ಅವರು ಈ ಸಂದೇಶವನ್ನು ತೆಗೆದುಕೊಂಡು
ಹೋದರು:

ಇಸ್ರೇಲರು ಮೋವಾಬ್ಯರ ಪ್ರದೇಶವನ್ನಾಗಲೀ
ಅಮ್ಮೋನಿಯರ ಪ್ರದೇಶವನ್ನಾಗಲೀ ತೆಗೆದುಕೊಳ್ಳ
ಲಿಲ್ಲ. 16ಇಸ್ರೇಲರು ಈಜಿಪ್ಟನ್ನು ಬಿಟ್ಟುಬಂದ
ಮೇಲೆ ಅರಣ್ಯ ಮಾರ್ಗವಾಗಿ ಕೆಂಪುಸಮುದ್ರಕ್ಕೆ
ಹೋದರು. ತರುವಾಯ ಅವರು ಕಾದೇಶಿಗೆ
ಹೋದರು. 17ಅವರು ಎದೋಮ್ಯರ ಅರಸನ
ಬಳಿಗೆ ದೂತರನ್ನು ಕಳುಹಿಸಿ, ‘‘ನಿನ್ನ ಪ್ರದೇಶ ವನ್ನು
ದಾಟಿಹೋಗುವುದಕ್ಕೆ ದಯವಿಟ್ಟು ಅನುಮತಿ
ಕೊಡು’’ ಎಂದು ಕೇಳಿಕೊಂಡರು. ಆದರೆ ಎದೋ
ಮಿನ ಅರಸನು ಅವರಿಗೆ ತಮ್ಮ ದೇಶವನ್ನು ದಾಟಿ
ಹೋಗಲು ಅನುಮತಿ ಕೊಡಲಿಲ್ಲ. ತರುವಾಯ
ಅವರು ಮೋವಾಬ್ಯರ ಅರಸನ ಬಳಿಗೆ ಅದೇ
ಸಂದೇಶವನ್ನು ಕಳುಹಿಸಿದರು. ಆದರೆ ಮೋವಾ
ಬ್ಯರ ಅರಸನು ಸಹ ಅವರಿಗೆ ಅವರ ದೇಶವನ್ನು
ದಾಟಿಹೋಗಲು ಅನುಮತಿ ಕೊಡಲಿಲ್ಲ. ಅದುದ
ರಿಂದ ಇಸ್ರೇಲರು ಕಾದೇಶಿನಲ್ಲಿ ನೆಲೆನಿಂತರು.

18ತರುವಾಯ ಇಸ್ರೇಲರು ಮರುಭೂಮಿ
ಯಲ್ಲಿ ಪ್ರಯಾಣ ಮಾಡಿ ಎದೋಮ್ ಮತ್ತು
ಮೋವಾಬ್ ದೇಶಗಳ ಮೇರೆಗಳನ್ನು ಸುತ್ತಿ
ಬಂದರು. ಇಸ್ರೇಲರು ಮೋವಾಬ್ ದೇಶದ
ಪೂರ್ವದಿಕ್ಕಿಗೆ ಪ್ರಯಾಣಮಾಡಿ ಅರ್ನೋನ್
ನದಿಯ ಆಚೆಯ ದಡದಲ್ಲಿ ಇಳಿದು ಕೊಂಡರು.
ಅವರು ಮೋವಾಬ್ ದೇಶದ ಮೇರೆಯನ್ನು ದಾಟ
ಲಿಲ್ಲ. (ಅರ್ನೋನ್ ನದಿಯು ಮೋವಾಬ್
ದೇಶದ ಮೇರೆಯಾಗಿತ್ತು.)

19ತರುವಾಯ ಇಸ್ರೇಲರು ಅಮೋರಿಯರ
ಅರಸನಾದ ಸೀಹೋನನ ಬಳಿಗೆ ದೂತರನ್ನು ಕಳು
ಹಿಸಿದರು. ಹೆಷ್ಬೋನ್ ಅಮೋರಿಯರ ದೇಶದ
ರಾಜಧಾನಿ ಯಾಗಿತ್ತು. ಆ ದೂತರು ಸೀಹೋನ
ನಿಗೆ, ‘‘ಇಸ್ರೇಲರು ನಿಮ್ಮ ಪ್ರದೇಶದಿಂದ ದಾಟಿ
ಹೋಗುವುದಕ್ಕೆ ಅನುಮತಿಯನ್ನು ಕೊಡು, ನಾವು
ನಮ್ಮ ದೇಶಕ್ಕೆ ಹೋಗ ಬಯಸುತ್ತೇವೆ’’ ಎಂದು
ಕೇಳಿದರು. 20ಆದರೆ ಅಮೋರಿಯರ ಅರಸನಾದ
ಸೀಹೋನನು ಇಸ್ರೇಲರಿಗೆ ತನ್ನ ಪ್ರದೇಶದ ಸೀಮೆ
ಯನ್ನು ದಾಟಲು ಬಿಡಲಿಲ್ಲ. ಸೀಹೋನನು ತನ್ನ

ಜನರನ್ನೆಲ್ಲಾ ಸೇರಿಸಿ ಯಹಚದಲ್ಲಿ ಪಾಳೆಯಮಾಡಿ
ಕೊಂಡನು. ಅಮೋರಿಯರು ಇಸ್ರೇಲರೊಂದಿಗೆ
ಯುದ್ಧಮಾಡಿದರು. [21]ಆದರೆ ಇಸ್ರೇಲರ ದೇವ
ರಾದ ಯೆಹೋವನು ಇಸ್ರೇಲರಿಗೆ ಸೀಹೋನ
ಮತ್ತು ಅವನ ಜನರನ್ನು ಸೋಲಿಸಲು ಸಹಾಯ
ಮಾಡಿದನು. ಆದುದರಿಂದ ಅಮೋರಿಯರ
ಪ್ರದೇಶವು ಇಸ್ರೇಲರ ಸ್ವತ್ತಾಯಿತು. [22]ಇಸ್ರೇಲರು
ಅಮೋರಿಯರ ಎಲ್ಲ ಪ್ರದೇಶವನ್ನು ತೆಗೆದು
ಕೊಂಡರು. ಆ ಪ್ರದೇಶವು ಅರ್ನೋನ್ ನದಿ
ಯಿಂದ ಯಬ್ಬೋಕ್ ನದಿಯವರೆಗೂ ಅರಣ್ಯ
ದಿಂದ ಜೋರ್ಡನ್ ನದಿಯವರೆಗೂ ಹಬ್ಬಿ
ಕೊಂಡಿದೆ.

[23]ಇಸ್ರೇಲರ ದೇವರಾದ ಯೆಹೋವನು
ಅಮೋರಿಯರನ್ನು ಅವರ ದೇಶದಿಂದ ಬಲವಂತ
ವಾಗಿ ಹೊರಗಟ್ಟಿ ಆ ಪ್ರದೇಶವನ್ನು ಇಸ್ರೇಲರಿಗೆ
ಕೊಟ್ಟನು. ಈಗ ಇಸ್ರೇಲರು ಈ ಪ್ರದೇಶವನ್ನು
ಬಿಡುವಂತೆ ನೀನು ಮಾಡಬಹುದೆಂದು ತಿಳಿದು
ಕೊಂಡಿರುವಿಯಾ? [24]ನಿಮ್ಮ ದೇವರಾದ
ಕೆಮೋಷನು* ನಿಮಗೆ ಕೊಟ್ಟ ಪ್ರದೇಶದಲ್ಲಿ ನೀವು
ಖಂಡಿತವಾಗಿ ವಾಸಮಾಡಬಹುದು. ಹಾಗೆಯೇ
ಯೆಹೋವನಾದ ನಮ್ಮ ದೇವರು ನಮಗೆ ಕೊಟ್ಟ
ಪ್ರದೇಶದಲ್ಲಿ ನಾವೂ ವಾಸ ಮಾಡುವೆವು.
[25]ಚಿಪ್ಪೋರನ ಮಗ ನಾದ ಬಾಲಾಕನಿಗಿಂತ ನೀನು
ಹೆಚ್ಚಿನವನೋ? ಅವನು ಮೋವಾಬ್ ದೇಶದ
ರಾಜನಾಗಿದ್ದನು. ಅವನು ಇಸ್ರೇಲರ ಸಂಗಡ
ಎಂದಾದರೂ ವಿವಾದ ಮಾಡಿದನೋ? ಅವರಿಗೆ
ವಿರೋಧವಾಗಿ ಯುದ್ಧಕ್ಕೆ ಬಂದನೋ?
[26]ಇಸ್ರೇಲರು ಮುನ್ನೂರು ವರ್ಷಗಳಿಂದ
ಹೆಷ್ಬೋನ್ ನಗರ ಮತ್ತು ಅದರ ಸುತ್ತಮುತ್ತಲಿನ
ಪಟ್ಟಣ ಗಳಲ್ಲಿಯೂ ಅರೋಯೇರ್ ನಗರ ಮತ್ತು
ಅದರ ಸುತ್ತ ಮುತ್ತಲಿನ ಪಟ್ಟಣಗಳಲ್ಲಿಯೂ
ಅರ್ನೋನ್ ನದಿತೀರದ ಎಲ್ಲ ನಗರಗಳಲ್ಲಿಯೂ
ಮುನ್ನೂರು ವರ್ಷಗಳಿಂದ ವಾಸ ಮಾಡುತ್ತಲಿ
ದ್ದಾರೆ. ಈ ನಗರಗಳನ್ನೆಲ್ಲಾ ಸ್ವಾಧೀನ ಪಡಿಸಿ
ಕೊಳ್ಳಲು ನೀವು ಇಷ್ಟು ವರ್ಷ ಏಕೆ ಪ್ರಯತ್ನ ಮಾಡ
ಲಿಲ್ಲ? [27]ಇಸ್ರೇಲರು ನಿಮ್ಮ ವಿರುದ್ಧ ಯಾವ ಪಾಪ
ವನ್ನೂ ಮಾಡಿಲ್ಲ. ಆದರೆ ನೀನು ಇಸ್ರೇಲರ ವಿರುದ್ಧ
ಬಹಳ ಕೆಟ್ಟ ದ್ದನ್ನು ಮಾಡುತ್ತಿರುವೆ. ನ್ಯಾಯವು
ಇಸ್ರೇಲರಪರವಾಗಿ ದೆಯೋ ಅಥವಾ ಅಮ್ಮೋನಿ
ಯರ ಪರವಾಗಿದೆಯೋ ಎಂಬುದನ್ನು ನಿಜವಾದ
ನ್ಯಾಯಾಧೀಶನಾದ ಯೆಹೋವನೇ ತೀರ್ಮಾನಿಸ
ಬೇಕು.

[28]ಆದರೆ ಯೆಫ್ತಾಹನ ಸಂದೇಶವನ್ನು ಅಮ್ಮೋನಿಯರ
ಅರಸನು ಕಿವಿಗೆ ಹಾಕಿಕೊಳ್ಳಲಿಲ್ಲ.

### ಯೆಫ್ತಾಹನ ಹರಕೆ

[29]ಆಗ ಯೆಹೋವನ ಆತ್ಮವು ಯೆಫ್ತಾಹನ ಮೇಲೆ
ಬಂತು. ಯೆಫ್ತಾಹನು ಗಿಲ್ಯಾದನ ಮತ್ತು ಮನಸ್ಸೆಯ
ಪ್ರದೇಶಗಳಲ್ಲಿ ಸಂಚರಿಸಿದನು. ಅವನು ಗಿಲ್ಯಾದಿನ
ಮಿಚ್ಪೆಗೆ ಬಂದನು. ಗಿಲ್ಯಾದಿನ ಮಿಚ್ಪೆಯ ನಗರದಿಂದ
ಅವನು ಅಮ್ಮೋನಿಯರ ಪ್ರದೇಶಕ್ಕೆ ಹೋದನು.

[30]ಯೆಫ್ತಾಹನು ಯೆಹೋವನಿಗೆ, ‘‘ನಾನು ಅಮ್ಮೋನಿ
ಯರನ್ನು ಸೋಲಿಸುವಂತೆ ನೀನು ಮಾಡಿದರೆ [31]ನಾನು
ಜಯಶಾಲಿಯಾಗಿ ಬರುವಾಗ ನನ್ನ ಮನೆಯಿಂದ ಹೊರ
ಬರುವ ಮೊದಲನೆಯ ಜೀವಿಯನ್ನು ನಿನಗೆ ಕೊಡುತ್ತೇನೆ.
ನಾನು ಅದನ್ನು ಯೆಹೋವನ ಸರ್ವಾಂಗಹೋಮಕ್ಕೆ
ಆಹುತಿಯಾಗಿ ಕೊಡುವೆನು’’ ಎಂದು ಹರಕೆ ಮಾಡಿ
ಕೊಂಡನು. [32]ಆಮೇಲೆ ಯೆಫ್ತಾಹನು ಅಮ್ಮೋನಿಯರ
ದೇಶಕ್ಕೆ ಹೋಗಿ ಯುದ್ಧ ಮಾಡಿದನು. ಅವರನ್ನು ಸೋಲಿ
ಸಲು ಯೆಹೋವನು ಯೆಫ್ತಾಹನಿಗೆ ಸಹಾಯ ಮಾಡಿ
ದನು. [33]ಅವನು ಅವರನ್ನು ಸೋಲಿಸಿ ಅರೋಯೇರ್
ನಗರದಿಂದ ಮಿನ್ನೀತ್ ನಗರದವರೆಗೆ ಇಪ್ಪತ್ತು ನಗರ
ಗಳನ್ನು ಗೆದ್ದುಕೊಂಡನು. ಆಮೇಲೆ ಅವನು ಅಮ್ಮೋನಿ
ಯರ ಸಂಗಡ ಯುದ್ಧಮಾಡಿ ಅಬೇಲ್ ಕೆರಾಮೀಮ್
ನಗರವನ್ನು ಗೆದ್ದುಕೊಂಡನು. ಇಸ್ರೇಲರು ಅಮ್ಮೋನಿಯ
ರನ್ನು ಸೋಲಿಸಿದರು. ಅಮ್ಮೋನಿಯರಿಗೆ ಇದೊಂದು
ದೊಡ್ಡ ಸೋಲಾಯಿತು.

[34]ಯೆಫ್ತಾಹನು ಮಿಚ್ಪೆಗೆ ಹಿಂದಿರುಗಿದನು.
ಯೆಫ್ತಾಹನು ತನ್ನ ಮನೆಗೆ ಹೋಗುತ್ತಿರಲು ಅವನನ್ನು
ಎದುರುಗೊಳ್ಳಲು ಅವನ ಮಗಳು ಮನೆಯಿಂದ ಹೊರಗೆ
ಬಂದಳು. ಅವಳು ದಮ್ಮಡಿ ಬಡಿಯುತ್ತ ನಾಟ್ಯ ವಾಡು
ತ್ತಿದ್ದಳು. ಅವಳು ಅವನ ಒಬ್ಬಳೇ ಮಗಳಾಗಿದ್ದಳು.
ಯೆಫ್ತಾಹನಿಗೆ ಬೇರೆ ಗಂಡು ಮಕ್ಕಳಾಗಲೀ ಹೆಣ್ಣು ಮಕ್ಕ
ಳಾಗಲೀ ಇರಲಿಲ್ಲ. ಯೆಫ್ತಾಹನು ಅವಳನ್ನು ತುಂಬ
ಪ್ರೀತಿಸುತ್ತಿದ್ದನು. [35]ತನ್ನ ಮನೆಯಿಂದ ಹೊರಬರುವ
ಜೀವಿಗಳಲ್ಲಿ ತನ್ನ ಮಗಳೇ ಮೊದಲನೆಯವಳಾದುದನ್ನು
ಕಂಡು ಯೆಫ್ತಾಹನು ದುಃಖದಿಂದ ತನ್ನ ಬಟ್ಟೆಗಳನ್ನು
ಹರಿದುಕೊಂಡನು. ‘‘ಅಯ್ಯೋ! ನನ್ನ ಮಗಳೇ, ನೀನು
ನನ್ನನ್ನು ಹಾಳು ಮಾಡಿದೆ. ನೀನು ನನಗೆ ಮಹಾಸಂಕಟ
ವನ್ನು ಉಂಟುಮಾಡಿದೆ. ನಾನು ಯೆಹೋವನಿಗೆ ಒಂದು
ಹರಕೆ ಹೊತ್ತಿದ್ದೇನೆ; ನಾನು ಅದನ್ನು ಬದಲಾಯಿಸಲು
ಸಾಧ್ಯವಿಲ್ಲ’’ ಎಂದು ಗೋಳಾಡಿದನು.

---

**ಕೆಮೋಷ್** ಮಿಲ್ಕಾಮ ಅಮೋನಿಯರ ದೇವರಾದರೂ ಮೋವಾಬ್ಯರ ರಾಷ್ಟ್ರೀಯ ದೇವರು ಕೆಮೋಷ.

36ಆಗ ಯೆಫ್ತಾಹನ ಮಗಳು ಅವನಿಗೆ, ‘‘ತಂದೆಯೇ,
ನೀನು ಯೆಹೋವನಿಗೆ ಹರಕೆ ಹೊತ್ತಿರುವೆ. ನಿನ್ನ ಹರಕೆ
ಯನ್ನು ಪೂರ್ಣಗೊಳಿಸು. ಏನು ಮಾಡುವೆನೆಂದು ಹೇಳಿ
ದ್ದಿಯೋ ಅದನ್ನು ಮಾಡು. ನಿನ್ನ ಶತ್ರುಗಳಾದ ಅಮ್ಮೋನಿ
ಯರನ್ನು ಸೋಲಿಸಲು ಯೆಹೋವನು ನಿನಗೆ ಸಹಾಯ
ಮಾಡಿದ್ದಾನೆ’’ ಎಂದಳು.
37ಯೆಫ್ತಾಹನ ಮಗಳು ತನ್ನ ತಂದೆಗೆ, ‘‘ನನಗೋಸ್ಕರ
ಒಂದು ಕೆಲಸವನ್ನು ಮಾಡು. ಎರಡು ತಿಂಗಳುಗಳವರೆಗೆ
ನನ್ನನ್ನು ಒಬ್ಬಂಟಿಗಳಾಗಿ ಇರಲು ಬಿಡು. ನಾನು ಬೆಟ್ಟ
ಪ್ರದೇಶಕ್ಕೆ ಹೋಗುತ್ತೇನೆ. ನಾನು ಮದುವೆ ಮಾಡಿ
ಕೊಳ್ಳುವುದಿಲ್ಲ ಮತ್ತು ಮಕ್ಕಳನ್ನು ಹೆರುವದಿಲ್ಲ. ನಾನು
ಮತ್ತು ನನ್ನ ಗೆಳತಿಯರು ಹೋಗಿ ಒಟ್ಟಾಗಿ ಅಳುತ್ತೇವೆ’’
ಎಂದಳು.
38ಯೆಫ್ತಾಹನು, ‘‘ಹೋಗು, ಹಾಗೆಯೇ ಮಾಡು’’
ಎಂದನು. ಯೆಫ್ತಾಹನು ಅವಳನ್ನು ಎರಡು ತಿಂಗಳುಗಳ
ವರೆಗೆ ಕಳುಹಿಸಿಕೊಟ್ಟನು. ಯೆಫ್ತಾಹನ ಮಗಳು ಮತ್ತು
ಆಕೆಯ ಗೆಳತಿಯರು ಬೆಟ್ಟಪ್ರದೇಶದಲ್ಲಿ ವಾಸ ಮಾಡಿ
ದರು. ಅವಳು ಮದುವೆಯಾಗುವುದಿಲ್ಲ ಮತ್ತು ಮಕ್ಕಳನ್ನು
ಹಡೆಯುವುದಿಲ್ಲ ಎಂಬ ಕಾರಣದಿಂದ ಅವರೆಲ್ಲರೂ
ಗೋಳಾಡಿದರು.
39ಎರಡು ತಿಂಗಳು ಗತಿಸಿದ ಮೇಲೆ ಯೆಫ್ತಾಹನ
ಮಗಳು ತನ್ನ ತಂದೆಯಲ್ಲಿಗೆ ಬಂದಳು. ಯೆಫ್ತಾಹನು
ದೇವರಿಗೆ ಹರಕೆ ಹೊತ್ತಂತೆ ಮಾಡಿದನು. ಯೆಫ್ತಾಹನ
ಮಗಳು ಎಂದೂ ಯಾರೊಂದಿಗೂ ಲೈಂಗಿಕ ಸಂಬಂಧ
ಹೊಂದಲಿಲ್ಲ. 40ಪ್ರತಿ ವರ್ಷ ಇಸ್ರೇಲಿನ ಹೆಂಗಸರು
ಗಿಲ್ಯಾದಿನ ಯೆಫ್ತಾಹನ ಮಗಳನ್ನು ಸ್ಮರಿಸುತ್ತಾರೆ.
ಇಸ್ರೇಲಿನ ಹೆಂಗಸರು ಯೆಫ್ತಾಹನ ಮಗಳಿಗಾಗಿ ಪ್ರತಿ
ವರ್ಷ ನಾಲ್ಕು ದಿನ ಅಳುತ್ತಾರೆ. ಇದು ಇಸ್ರೇಲಿನಲ್ಲಿ
ಒಂದು ಪದ್ಧತಿಯಾಗಿದೆ.

## ಯೆಫ್ತಾಹನು ಮತ್ತು ಎಫ್ರಾಯೀಮ್

12 ಎಫ್ರಾಯೀಮ್ಯರು ತಮ್ಮ ಸೈನಿಕರೆಲ್ಲರನ್ನು
ಒಂದು ಕಡೆ ಸೇರಿಸಿದರು. ಆಮೇಲೆ ಅವರು ನದಿ
ಯನ್ನು ದಾಟಿ ಝೂಫೋನ್ ನಗರಕ್ಕೆ ಬಂದರು. ಅವರು
ಯೆಫ್ತಾಹನಿಗೆ, ‘‘ನೀನು ಅಮ್ಮೋನಿಯರ ಸಂಗಡ ಯುದ್ಧ
ಮಾಡುವಾಗ ಸಹಾಯಕ್ಕಾಗಿ ನಮ್ಮನ್ನು ಏಕೆ ಕರೆಯ
ಲಿಲ್ಲ? ನಿನ್ನನ್ನು ನಿನ್ನ ಮನೆಯೊಳಗೆ ಹಾಕಿ ನಿನ್ನ ಮನೆ
ಯನ್ನು ಸುಟ್ಟುಬಿಡುತ್ತೇವೆ’’ ಎಂದರು.
2ಯೆಫ್ತಾಹನು, ‘‘ಅಮ್ಮೋನಿಯರು ನಮಗೆ ಅನೇಕ
ತೊಂದರೆಗಳನ್ನು ಕೊಡುತ್ತಿದ್ದರು. ಆದುದರಿಂದ ನಾನು
ಮತ್ತು ನನ್ನ ಜನರು ಅವರ ವಿರುದ್ಧ ಹೋರಾಡಿದೆವು.
ನಾನು ನಿಮ್ಮನ್ನು ಕರೆದೆ. ಆದರೆ ನೀವು ನಮಗೆ ಸಹಾಯ
ಮಾಡಲು ಬರಲಿಲ್ಲ. 3ನೀವು ನಮ್ಮ ಸಹಾಯಕ್ಕೆ ಬರು
ವುದಿಲ್ಲವೆಂದು ತಿಳಿದಾಗ ನಾನು ನನ್ನ ಜೀವವನ್ನೇ
ಗಂಡಾಂತರಕ್ಕೆ ಒಡ್ಡಿದೆ. ಅಮ್ಮೋನಿಯರ ವಿರುದ್ಧ ಯುದ್ಧ
ಮಾಡಲು ನಾನು ನದಿಯನ್ನು ದಾಟಿಹೋದೆ. ಅವರನ್ನು
ಸೋಲಿಸಲು ಯೆಹೋವನು ನನಗೆ ಸಹಾಯ ಮಾಡಿ
ದನು. ಈಗ ನೀವು ನನ್ನ ಸಂಗಡ ಯುದ್ಧ ಮಾಡುವುದ
ಕ್ಕಾಗಿ ಏಕೆ ಬಂದಿದ್ದೀರಿ?’’ ಎಂದು ಕೇಳಿದನು.
4ಆಗ ಯೆಫ್ತಾಹನು ಗಿಲ್ಯಾದಿನ ಜನರನ್ನು ಒಂದೆಡೆ ಸೇರಿ
ಸಿದನು. ಅವರು ಎಫ್ರಾಯೀಮ್ಯರ ವಿರುದ್ಧ ಯುದ್ಧ
ಮಾಡಿದರು. ಏಕೆಂದರೆ ಎಫ್ರಾಯೀಮ್ಯರು ಗಿಲ್ಯಾದ್ಯ
ರನ್ನು ಅವಮಾನ ಮಾಡಿದ್ದರು. ಅವರು, ‘‘ಗಿಲ್ಯಾದಿನವ
ರಾದ ನೀವು ಎಫ್ರಾಯೀಮ್ಯರಲ್ಲಿ ಬದುಕಿ ಉಳಿದವರೇ
ಹೊರತು ಬೇರೆಯವರಲ್ಲ. ನಿಮಗೆ ನಿಮ್ಮ ಸ್ವಂತ
ಪ್ರದೇಶವೂ ಇಲ್ಲ. ನಿಮ್ಮ ಒಂದು ಭಾಗವು ಎಫ್ರಾ
ಯೀಮ್ ಕುಲಕ್ಕೆ ಸೇರಿದೆ; ಇನ್ನೊಂದು ಭಾಗವು ಮನಸ್ಸೆ
ಕುಲಕ್ಕೆ ಸೇರಿದೆ’’ ಎಂದಿದ್ದರು. ಗಿಲ್ಯಾದಿನ ಜನರು
ಎಫ್ರಾಯೀಮ್ ಜನರನ್ನು ಸೋಲಿಸಿದರು.
5ಗಿಲ್ಯಾದಿನ ಜನರು ಜೋರ್ಡನ್ ನದಿಯನ್ನು
ದಾಟಲು ಅನುಕೂಲವಾದ ಸ್ಥಳಗಳನ್ನೆಲ್ಲಾ ವಶಪಡಿಸಿ
ಕೊಂಡರು. ಅವು ಎಫ್ರಾಯೀಮ್ ಪ್ರದೇಶದೊಳಕ್ಕೆ
ಹೋಗುವ ಮಾರ್ಗದಲ್ಲಿಯೇ ಇದ್ದವು. ಯಾವಾಗ
ಲಾದರೂ ಎಫ್ರಾಯೀಮ್ ಕುಲದವರಲ್ಲಿ ಅಳಿದುಳಿದವ
ನೊಬ್ಬ ಅಲ್ಲಿಗೆ ಬಂದು, ‘‘ನನ್ನನ್ನು ದಾಟಗೊಡಿರಿ’’ಎಂದು
ಕೇಳಿದರೆ ಗಿಲ್ಯಾದಿನವರು, ‘‘ನೀನು ಎಫ್ರಾಯೀಮಿನ
ವನೇ?’’ ಎಂದು ಕೇಳುತ್ತಿದ್ದರು. ಅವನು ‘‘ಅಲ್ಲ’’ಎಂದು
ಉತ್ತರಿಸಿದರೆ, 6ಅವರು ಅವನಿಗೆ, ‘‘ಷಿಬ್ಬೋಲೆತ್ ಅನ್ನು’’
ಎಂದು ಹೇಳುವರು. ಎಫ್ರಾಯೀಮಿನ ಜನರಿಗೆ ಆ ಪದ
ವನ್ನು ಸರಿಯಾಗಿ ಉಚ್ಚರಿಸಲು ಬರುತ್ತಿರಲಿಲ್ಲ. ಅವರು
ಆ ಪದವನ್ನು ಸಿಬ್ಬೋಲೆತ್’’ ಎಂದು ಉಚ್ಚರಿಸುತ್ತಿದ್ದರು.
ಆ ಮನುಷ್ಯನು ‘‘ಸಿಬ್ಬೋಲೆತ್’’ ಅಂದ ತಕ್ಷಣ ಗಿಲ್ಯಾದಿನ
ಜನರಿಗೆ ಅವನು ಎಫ್ರಾಯೀಮ್ಯನೆಂದು ಗೊತ್ತಾಗುತ್ತಿತ್ತು.
ಅವರು ಅವನನ್ನು ದಾರಿಯ ತಿರುವುಗಳಲ್ಲೇ ಕೊಂದು
ಬಿಡುತ್ತಿದ್ದರು. ಅವರು ಎಫ್ರಾಯೀಮಿನ ನಲವತ್ತೆರಡು
ಸಾವಿರ ಜನರನ್ನು ಕೊಂದುಹಾಕಿದರು.
7ಯೆಫ್ತಾಹನು ಆರು ವರ್ಷ ಇಸ್ರೇಲರ ನ್ಯಾಯಾಧೀಶ
ನಾಗಿದ್ದನು. ಆಮೇಲೆ ಗಿಲ್ಯಾದ್ಯನಾದ ಯೆಫ್ತಾಹನು
ಮರಣ ಹೊಂದಿದನು. ಅವರು ಅವನ ಶವವನ್ನು
ಗಿಲ್ಯಾದಿನ ಪಟ್ಟಣದಲ್ಲಿ ಸಮಾಧಿ ಮಾಡಿದರು.

## ನ್ಯಾಯಾಧೀಶನಾದ ಇಬ್ಜಾನನು

8ಯೆಫ್ತಾಹನ ತರುವಾಯ ಇಬ್ಜಾನ ಎಂಬವನು
ಇಸ್ರೇಲರ ನ್ಯಾಯಾಧೀಶನಾಗಿದ್ದನು. ಇಬ್ಜಾನನು
ಬೇತ್ಲೆಹೇಮ್ ನಗರದವನು. 9ಇಬ್ಜಾನನಿಗೆ ಮೂವತ್ತು
ಗಂಡುಮಕ್ಕಳು ಮತ್ತು ಮೂವತ್ತು ಹೆಣ್ಣುಮಕ್ಕಳು

ಇದ್ದರು. ಅವನು ತನ್ನ ಮೂವತ್ತು ಹೆಣ್ಣುಮಕ್ಕಳಿಗೆ ತನ್ನ
ರಕ್ತಸಂಬಂಧಿ ಅಲ್ಲದವರೊಂದಿಗೆ ಮದುವೆಯಾಗ
ಬೇಕೆಂದು ಹೇಳಿದನು. ಅವನು ತನ್ನ ಸಂಬಂಧಿಗಳಲ್ಲದ
ಮೂವತ್ತು ಕನ್ಯೆಯರನ್ನು ಹುಡುಕಿ ತನ್ನ ಗಂಡುಮಕ್ಕಳಿಗೆ
ಅವರನ್ನು ಮದುವೆ ಮಾಡಿಸಿದನು. ಇಬ್ಜಾನನು ಏಳು
ವರ್ಷ ಇಸ್ರೇಲರ ನ್ಯಾಯಾಧೀಶನಾಗಿದ್ದನು. [10]ಆಮೇಲೆ
ಇಬ್ಜಾನನು ಮರಣ ಹೊಂದಿದನು. ಅವನನ್ನು ಬೇತ್ಲೆ
ಹೇಮಿನಲ್ಲಿ ಸಮಾಧಿಮಾಡಿದರು.

## ನ್ಯಾಯಾಧೀಶನಾದ ಏಲೋನನು

[11]ಇಬ್ಜಾನನ ತರುವಾಯ ಏಲೋನ ಎಂಬವನು
ಇಸ್ರೇಲರ ನ್ಯಾಯಾಧೀಶನಾದನು. ಏಲೋನನು
ಜೆಬುಲೂನ್ ಕುಲದವನಾಗಿದ್ದನು. ಅವನು ಹತ್ತು ವರ್ಷ
ಇಸ್ರೇಲರ ನ್ಯಾಯಾಧೀಶನಾಗಿದ್ದನು. [12]ಆಮೇಲೆ
ಜೆಬುಲೂನ್ಯನಾದ ಏಲೋನನು ಮರಣ ಹೊಂದಿದನು.
ಅವನ ಶವವನ್ನು ಜೆಬುಲೂನ್ ದೇಶದ ಅಯ್ಯಾಲೋನಿ
ನಲ್ಲಿ ಸಮಾಧಿಮಾಡಿದರು.

## ನ್ಯಾಯಾಧೀಶನಾದ ಅಬ್ದೋನನು

[13]ಏಲೋನನ ಮರಣಾನಂತರ ಹಿಲ್ಲೇಲನ ಮಗನಾದ
ಅಬ್ದೋನ ಎಂಬವನು ಇಸ್ರೇಲರ ನ್ಯಾಯಾಧೀಶ
ನಾದನು. ಅಬ್ದೋನನು ಪಿರಾತೋನ ನಗರದವನಾಗಿ
ದ್ದನು. [14]ಅಬ್ದೋನನಿಗೆ ನಲವತ್ತು ಮಕ್ಕಳೂ ಮೂವತ್ತು
ಮೊಮ್ಮಕ್ಕಳೂ ಇದ್ದರು. ಇವರೆಲ್ಲರಿಗೆ ಸವಾರಿ ಮಾಡು
ವುದಕ್ಕೋಸ್ಕರ ಎಪ್ಪತ್ತು ಕತ್ತೆಗಳಿದ್ದವು. ಅಬ್ದೋನನು
ಎಂಟು ವರ್ಷ ಇಸ್ರೇಲರಿಗೆ ನ್ಯಾಯಾಧೀಶನಾಗಿದ್ದನು.
[15]ಆಮೇಲೆ ಹಿಲ್ಲೇಲನ ಮಗನಾದ ಅಬ್ದೋನನು ಮರಣ
ಹೊಂದಿದನು. ಅವನ ಶವವನ್ನು ಪಿರಾತೋನ ನಗರದಲ್ಲಿ
ಸಮಾಧಿಮಾಡಿದರು. ಪಿರಾತೋನ ನಗರವು ಎಫ್ರಾ-
ಯೀಮ್ ಪ್ರದೇಶದಲ್ಲಿದೆ. ಇದು ಅಮಾಲೇಕ್ಯರು
ವಾಸಮಾಡುತ್ತಿದ್ದ ಬೆಟ್ಟಪ್ರದೇಶದಲ್ಲಿದೆ.

## ಸಂಸೋನನ ಜನನ

13 ಇಸ್ರೇಲರು ಮತ್ತೆ ಯೆಹೋವನಿಗೆ ವಿರೋಧ
ವಾಗಿ ದುಷ್ಕೃತ್ಯಗಳನ್ನು ಮಾಡಿದರು. ಆದುದ
ರಿಂದ ಫಿಲಿಷ್ಟಿಯರು ನಲವತ್ತು ವರ್ಷ ಅವರನ್ನು ಆಳು
ವಂತೆ ಯೆಹೋವನು ಮಾಡಿದನು.

[2]ಚೊರ್ಗಾ ನಗರದಲ್ಲಿ ಒಬ್ಬ ಮನುಷ್ಯನಿದ್ದನು. ಅವನ
ಹೆಸರು ಮಾನೋಹ. ಅವನು ದಾನ್ ಕುಲದವ
ನಾಗಿದ್ದನು. ಮಾನೋಹನಿಗೆ ಒಬ್ಬ ಹೆಂಡತಿಯಿದ್ದಳು.
ಆದರೆ ಅವಳು ಬಂಜೆಯಾಗಿದ್ದಳು. [3]ಒಮ್ಮೆ ಯೆಹೋವನ
ದೂತನು ಮಾನೋಹನ ಹೆಂಡತಿಗೆ ಪ್ರತ್ಯಕ್ಷನಾಗಿ,
''ನೀನು ಮಕ್ಕಳನ್ನು ಪಡೆಯಲು ಸಾಧ್ಯವಾಗಿಲ್ಲ; ಆದರೆ
ನೀನು ಗರ್ಭವತಿಯಾಗಿ ಒಬ್ಬ ಮಗನನ್ನು ಹೆರುವೆ.
[4]ದ್ರಾಕ್ಷಾರಸವನ್ನಾಗಲೀ ಬೇರೆ ಯಾವ ಮದ್ಯವನ್ನಾಗಲೀ
ಕುಡಿಯಬೇಡ; ಯಾವ ನಿಷಿದ್ಧ* ಪದಾರ್ಥವನ್ನೂ
ಊಟಮಾಡಬೇಡ. [5]ಏಕೆಂದರೆ ನೀನು ಗರ್ಭವತಿ
ಯಾಗಿರುವೆ ಮತ್ತು ನಿನಗೊಬ್ಬ ಮಗನು ಹುಟ್ಟಲಿದ್ದಾನೆ.
ಅವನು ಹುಟ್ಟಿದಂದಿನಿಂದಲೇ ದೇವರಿಗೆ ಪ್ರತಿಷ್ಠಿತ
ನಾಗಿದ್ದಾನೆ.* ಆದ್ದರಿಂದ ಅವನ ಕೂದಲನ್ನು ಕತ್ತರಿಸ
ಕೂಡದು. ಅವನು ಇಸ್ರೇಲರನ್ನು ಫಿಲಿಷ್ಟಿಯರ ಹಿಡಿತ
ದಿಂದ ಬಿಡಿಸುವನು'' ಎಂದು ಹೇಳಿದನು.

[6]ಆಗ ಆ ಸ್ತ್ರೀಯು ತನ್ನ ಗಂಡನ ಬಳಿಗೆ ಹೋಗಿ, ''ಒಬ್ಬ
ದೇವಪುರುಷನು ನನ್ನಲ್ಲಿಗೆ ಬಂದನು. ಅವನು ದೇವರಿಂದ
ಬಂದ ದೇವದೂತನಂತೆ ಕಂಡನು. ನನಗೆ ಭಯ
ವಾಯಿತು. ನಾನು ಅವನಿಗೆ, 'ನೀನು ಎಲ್ಲಿಂದ ಬಂದೆ'
ಎಂದು ಕೇಳಲಿಲ್ಲ; ಅವನೂ ನನಗೆ ತನ್ನ ಹೆಸರನ್ನು ಹೇಳ
ಲಿಲ್ಲ. [7]ಆದರೆ ಅವನು ನನಗೆ 'ನೀನು ಗರ್ಭವತಿ
ಯಾಗಿರುವೆ; ನಿನಗೊಬ್ಬ ಮಗನು ಹುಟ್ಟುತ್ತಾನೆ. ನೀನು
ದ್ರಾಕ್ಷಾರಸವನ್ನಾಗಲೀ ಯಾವ ಮದ್ಯವನ್ನಾಗಲೀ
ಕುಡಿಯಬೇಡ. ಯಾವ ನಿಷಿದ್ಧ ಆಹಾರವನ್ನೂ ತಿನ್ನ
ಬೇಡ. ಏಕೆಂದರೆ ಆ ಹುಡುಗನು ಹುಟ್ಟಿದಂದಿನಿಂದ
ಸಾಯುವವರೆಗೂ ದೇವರಿಗೆ ಪ್ರತಿಷ್ಠಿತನಾಗಿರುವನು
ಎಂದು ಹೇಳಿದನು''' ಅಂದಳು.

[8]ಆಗ ಮಾನೋಹನು ದೇವರಿಗೆ, ''ಯೆಹೋವನೇ, ಆ
ದೇವಪುರುಷನನ್ನು ನಮ್ಮಲ್ಲಿಗೆ ಇನ್ನೊಮ್ಮೆ ದಯವಿಟ್ಟು
ಕಳುಹಿಸೆಂದು ಬೇಡಿಕೊಳ್ಳುತ್ತೇವೆ. ಹುಟ್ಟಲಿರುವ ಮಗನಿ
ಗಾಗಿ ನಾವು ಮಾಡಬೇಕಾದದ್ದನ್ನು ಅವನು ನಮಗೆ
ತಿಳಿಸಲಿ'' ಎಂದು ಬೇಡಿಕೊಂಡನು.

[9]ಯೆಹೋವನು ಮಾನೋಹನ ಪ್ರಾರ್ಥನೆಯನ್ನು
ಕೇಳಿದನು. ದೇವದೂತನು ಮತ್ತೊಮ್ಮೆ ಆ ಸ್ತ್ರೀಯ ಬಳಿಗೆ
ಬಂದನು. ಆಗ ಅವಳು ಹೊಲದಲ್ಲಿ ಕುಳಿತಿದ್ದಳು; ಅವಳ
ಗಂಡ ಅಲ್ಲಿರಲಿಲ್ಲ. [10]ಆ ಸ್ತ್ರೀಯು ಓಡಿಹೋಗಿ ತನ್ನ
ಗಂಡನಿಗೆ, ''ಆ ಮನುಷ್ಯನು ತಿರುಗಿ ಬಂದಿದ್ದಾನೆ, ಆ ದಿನ
ನನ್ನಲ್ಲಿಗೆ ಬಂದ ಮನುಷ್ಯನು ಈಗ ಇಲ್ಲಿದ್ದಾನೆ'' ಅಂದಳು.
[11]ಮಾನೋಹನು ಎದ್ದು ತನ್ನ ಹೆಂಡತಿಯನ್ನು ಹಿಂಬಾ
ಲಿಸಿದನು. ಅವನು ಆ ಮನುಷ್ಯನ ಹತ್ತಿರ ಬಂದಾಗ, ''ನನ್ನ
ಹೆಂಡತಿಯ ಜೊತೆಗೆ ಹಿಂದೆ ಮಾತನಾಡಿದ ಮನುಷ್ಯನು
ನೀನೋ?'' ಎಂದು ಕೇಳಿದನು.

ಆ ದೇವದೂತನು, ''ಹೌದು, ನಾನೇ'' ಅಂದನು.

[12]ಮಾನೋಹನು, ''ನೀನು ಹೇಳಿದ್ದು ನೆರವೇರುವು
ದೆಂದು ನಾನು ನಂಬುತ್ತೇನೆ. ಆ ಮಗುವಿಗೋಸ್ಕರ ನಾವು

---

**ನಿಷಿದ್ಧ** ಅಥವಾ ''ತ್ಯಾಜ್ಯ'' ''ಅಪರಿಶುದ್ಧ'' ದೇವರ ಪೂಜೆಯಲ್ಲಿ ಉಪಯೋಗಕ್ಕೆ ಅನರ್ಹವಾದದ್ದು. ನೋಡಿ ಯಾಜಕಕಾಂಡ 11-15.

**ಪ್ರತಿಷ್ಠಿತನಾದವನು** ಮೂಲ ನಾಜೀರನು.

ಮಾಡತಕ್ಕದ್ದೇನು? ಅವನನ್ನು ಹೇಗೆ ನಡಿಸತಕ್ಕದ್ದು'' ಎಂದು ಕೇಳಿದನು.

13ಯೆಹೋವನ ದೂತನು ಮಾನೋಹನಿಗೆ,''ನಿನ್ನ ಹೆಂಡತಿಯು ನಾನು ಹೇಳಿದ್ದೆಲ್ಲವನ್ನು ಮಾಡಬೇಕು. ಅವಳು ದ್ರಾಕ್ಷಾಫಲಗಳನ್ನು ತಿನ್ನಬಾರದು; ದ್ರಾಕ್ಷಾರಸವನ್ನಾಗಲಿ ಬೇರೆ ಯಾವ ಮದ್ಯವನ್ನಾಗಲಿ ಕುಡಿಯಬಾರದು. 14ಅವಳು ನಿಷಿದ್ಧವಾದ ಯಾವ ಆಹಾರವನ್ನೂ ತಿನ್ನಬಾರದು. ನಾನು ಅವಳಿಗೆ ಆಜ್ಞಾಪಿಸಿದ್ದನ್ನೆಲ್ಲಾ ಮಾಡಬೇಕು'' ಎಂದು ಹೇಳಿದನು.

15ಆಗ ಮಾನೋಹನು ಯೆಹೋವನ ದೂತನಿಗೆ, ''ನೀನು ಸ್ವಲ್ಪಹೊತ್ತು ಇಲ್ಲಿಯೇ ಇರಬೇಕೆಂಬುದು ನಮ್ಮ ಇಚ್ಛೆ. ನಾವು ನಿನ್ನ ಊಟಕ್ಕಾಗಿ ಒಂದು ಮರಿಹೋತವನ್ನು ಬೇಯಿಸಿ ಬಡಿಸುತ್ತೇವೆ'' ಎಂದನು.

16ಆಗ ಯೆಹೋವನ ದೂತನು ಮಾನೋಹನಿಗೆ, ''ನೀನು ನನ್ನನ್ನು ಹೋಗದಂತೆ ನಿಲ್ಲಿಸಿಕೊಂಡರೂ ಸಹ ನಾನು ನಿಮ್ಮ ಆಹಾರವನ್ನು ಊಟ ಮಾಡುವುದಿಲ್ಲ. ಏನಾದರೂ ಕೊಡಬೇಕೆಂದು ನಿನಗೆ ಮನಸ್ಸಿದ್ದರೆ ಅದನ್ನು ಯೆಹೋವನಿಗೆ ಸರ್ವಾಂಗ ಹೋಮವಾಗಿ ಸಮರ್ಪಿಸು'' ಅಂದನು. (ಅವನು ಯೆಹೋವನ ದೂತನೆಂಬುದು ಮಾನೋಹನಿಗೆ ಗೊತ್ತಿರಲಿಲ್ಲ.)

17ಮಾನೋಹನು ಯೆಹೋವನ ದೂತನಿಗೆ, ''ನೀನು ಹೇಳಿದ್ದು ನೆರವೇರಿದಾಗ ನಿನ್ನನ್ನು ಸನ್ಮಾನಿಸಬೇಕೆಂದಿರುತ್ತೇವೆ. ನಿನ್ನ ಹೆಸರೇನು?'' ಎಂದು ಕೇಳಿದನು.

18ಯೆಹೋವನ ದೂತನು, ''ನೀನು ನನ್ನ ಹೆಸರನ್ನು ಏಕೆ ಕೇಳುವೆ? ಅದು ನೀನು ನಂಬಲಾರದಷ್ಟು ಆಶ್ಚರ್ಯಕರವಾದದ್ದು'' ಎಂದನು.

19ಮಾನೋಹನು ಒಂದು ಮರಿಹೋತವನ್ನೂ ಧಾನ್ಯವನ್ನೂ ತಂದು ಯೆಹೋವನಿಗೆ ಅರ್ಪಿಸಿದನು. 20ಮಾನೋಹ ಮತ್ತು ಅವನ ಹೆಂಡತಿಯ ಕಣ್ಣೆದುರಿನಲ್ಲಿಯೇ ಯಜ್ಞವೇದಿಕೆಯಿಂದ ಆಕಾಶಕ್ಕೆ ಹೋಗುತ್ತಿರುವ ಅಗ್ನಿಜ್ವಾಲೆಯಲ್ಲಿ ಆ ಯೆಹೋವನ ದೂತನು ಆಕಾಶಕ್ಕೆ ಏರಿ ಹೋದನು.

ಮಾನೋಹ ಮತ್ತು ಅವನ ಹೆಂಡತಿ ಅದನ್ನು ಕಂಡು ನೆಲದ ಮೇಲೆ ಅಡ್ಡಬಿದ್ದರು. 21ಆ ಮನುಷ್ಯನು ನಿಜವಾಗಿಯೂ ಯೆಹೋವನ ದೂತನೆಂದು ಕೊನೆಗೆ ಮಾನೋಹನು ಅರಿತುಕೊಂಡನು. ಯೆಹೋವನ ದೂತನು ಅವರಿಗೆ ಪುನಃ ಕಾಣಿಸಲಿಲ್ಲ. 22ಮಾನೋಹನು ತನ್ನ ಹೆಂಡತಿಗೆ, ''ನಾವು ದೇವರನ್ನು ಕಂಡೆವು, ಆದುದರಿಂದ ಖಂಡಿತವಾಗಿ ನಾವು ಸತ್ತುಹೋಗುತ್ತೇವೆ'' ಅಂದನು.

23ಆದರೆ ಅವನ ಹೆಂಡತಿಯು ಅವನಿಗೆ, ''ಯೆಹೋವನು ನಮ್ಮನ್ನು ಕೊಲ್ಲಬಯಸುವುದಿಲ್ಲ. ಯೆಹೋವನು ನಮ್ಮನ್ನು ಕೊಲ್ಲಬೇಕೆಂದಿದ್ದರೆ ಅವನು ನಮ್ಮ ಕೈಯಿಂದ ಸರ್ವಾಂಗಹೋಮವನ್ನೂ ಧಾನ್ಯ ಸಮರ್ಪಣೆಯನ್ನೂ ಸ್ವೀಕರಿಸುತ್ತಿರಲಿಲ್ಲ; ಅವನು ಇವುಗಳನ್ನೆಲ್ಲಾ ನಮಗೆ ತೋರಿಸುತ್ತಿರಲಿಲ್ಲ; ಇದನ್ನೆಲ್ಲ ನಮಗೆ ಹೇಳುತ್ತಿರಲಿಲ್ಲ'' ಎಂದಳು.

24ಆ ಸ್ತ್ರೀಗೆ ಒಂದು ಗಂಡುಮಗು ಜನಿಸಿತು. ಅವಳು ಅದಕ್ಕೆ ಸಂಸೋನ ಎಂದು ಹೆಸರಿಟ್ಟಳು. ಸಂಸೋನನು ಬೆಳೆದು ದೊಡ್ಡವನಾದನು. ಯೆಹೋವನು ಅವನನ್ನು ಆಶೀರ್ವದಿಸಿದನು. 25ಅವನು ಮಾಹಾನೆಹದಾನ ನಗರದಲ್ಲಿದ್ದಾಗ ಯೆಹೋವನ ಆತ್ಮವು ಸಂಸೋನನನ್ನು ಪ್ರೇರೇಪಿಸತೊಡಗಿತು. ಈ ನಗರವು ಚೊರ್ಗ ಮತ್ತು ಎಷ್ಟಾವೋಲ್ ನಗರಗಳ ಮಧ್ಯದಲ್ಲಿದೆ.

## ಸಂಸೋನನ ಮದುವೆ

14 ಸಂಸೋನನು ತಿಮ್ನಾ ನಗರಕ್ಕೆ ಹೋದನು. ಅವನು ಅಲ್ಲಿ ಒಬ್ಬ ಫಿಲಿಷ್ಟಿಯರ ತರುಣಿಯನ್ನು ನೋಡಿದನು. 2ಅವನು ಮನೆಗೆ ಹಿಂದಿರುಗಿ ತನ್ನ ತಂದೆತಾಯಿಗಳಿಗೆ, ''ನಾನು ತಿಮ್ನಾ ನಗರದಲ್ಲಿ ಫಿಲಿಷ್ಟಿಯರ ಸ್ತ್ರೀಯನ್ನು ನೋಡಿದ್ದೇನೆ. ನೀವು ಅವಳನ್ನು ನನಗೆ ಮದುವೆ ಮಾಡಿಸಿಕೊಡಿ'' ಎಂದು ಕೇಳಿದನು.

3ಅವನ ತಂದೆತಾಯಿಗಳು, ''ಇಸ್ರೇಲರಲ್ಲಿಯೇ ಒಬ್ಬ ಸ್ತ್ರೀ ಇದ್ದಾಳೆ. ನೀನು ಅವಳನ್ನು ಮದುವೆಯಾಗು. ನೀನು ಫಿಲಿಷ್ಟಿಯರ ಹೆಣ್ಣನ್ನು ಮದುವೆಯಾಗುವುದೇಕೆ? ಅವರು ಸುನ್ನತಿಯನ್ನು ಮಾಡಿಸಿಕೊಂಡವರಲ್ಲ'' ಎಂದರು.

ಆದರೆ ಸಂಸೋನನು, ''ನನಗೆ ಆಕೆಯನ್ನೇ ಮದುವೆಯಾಗಬೇಕು. ನಾನು ಆಕೆಯನ್ನೇ ಮೆಚ್ಚಿಕೊಂಡಿದ್ದೇನೆ'' ಎಂದನು. 4ಇದು ಯೆಹೋವನ ಚಿತ್ತವೆಂಬುದು ಸಂಸೋನನ ತಂದೆತಾಯಿಗಳಿಗೆ ತಿಳಿದಿರಲಿಲ್ಲ. ಫಿಲಿಷ್ಟಿಯರಿಗೆ ಕೇಡುಮಾಡಲು ಯೆಹೋವನು ತಕ್ಕ ಮಾರ್ಗವನ್ನು ಹುಡುಕುತ್ತಿದ್ದನು. ಆ ಸಮಯದಲ್ಲಿ ಫಿಲಿಷ್ಟಿಯರು ಇಸ್ರೇಲರ ಮೇಲೆ ಆಳ್ವಿಕೆ ಮಾಡುತ್ತಿದ್ದರು.

5ಸಂಸೋನನು ತನ್ನ ತಂದೆತಾಯಿಗಳೊಂದಿಗೆ ತಿಮ್ನಾ ನಗರಕ್ಕೆ ಹೋದನು. ಅವರು ನಗರದ ಸಮೀಪದ ದ್ರಾಕ್ಷಿತೋಟಗಳವರೆಗೆ ಹೋದರು. ಅಲ್ಲಿ ಹಠಾತ್ತಾಗಿ ಒಂದು ಪ್ರಾಯದ ಸಿಂಹವು ಘರ್ಜಿಸಿ ಸಂಸೋನನ ಮೇಲೆ ಬಿತ್ತು. 6ಯೆಹೋವನ ಆತ್ಮವು ಸಂಸೋನನ ಮೇಲೆ ಪ್ರಬಲವಾಗಿ ಬಂದುದರಿಂದ ಅವನು ಬರಿಗೈಯಿಂದಲೇ ಹೋತದ ಮರಿಯೊ ಎಂಬಂತೆ ಅದನ್ನು ಎರಡು ಹೋಳಾಗಿ ಸೀಳಿಬಿಟ್ಟನು. ಆದರೆ ಸಂಸೋನನು ಇದನ್ನು ತನ್ನ ತಂದೆತಾಯಿಗಳಿಗೆ ಹೇಳಲಿಲ್ಲ.

7ಸಂಸೋನನು ನಗರಕ್ಕೆ ಹೋಗಿ ಆ ಫಿಲಿಷ್ಟಿಯ ಸ್ತ್ರೀಯೊಂದಿಗೆ ಮಾತನಾಡಿ ಅವಳನ್ನು ಇಷ್ಟಪಟ್ಟನು. 8ಕೆಲವು ದಿನಗಳಾದ ಮೇಲೆ ಸಂಸೋನನು ಆ ಫಿಲಿಷ್ಟಿಯ

ಸ್ತ್ರೀಯನ್ನು ಮದುವೆಯಾಗುವುದಕ್ಕೋಸ್ಕರ ತಿರುಗಿ ಹೋಗುತ್ತಿದ್ದನು. ದಾರಿಯಲ್ಲಿ ಅವನು ಆ ಸತ್ತಸಿಂಹವನ್ನು ನೋಡುವುದಕ್ಕೆ ಹೋದನು. ಅವನು ಆ ಸತ್ತಸಿಂಹದ ದೇಹದಲ್ಲಿ ಒಂದು ಜೇನುಗೂಡನ್ನು ಕಂಡನು. ಅದರಲ್ಲಿ ಜೇನುತುಪ್ಪವಿತ್ತು.
9ಸಂಸೋನನು ತನ್ನ ಕೈಯಿಂದ ಸ್ವಲ್ಪ ಜೇನುತುಪ್ಪವನ್ನು ತೆಗೆದುಕೊಂಡು ಅದನ್ನು ತಿನ್ನುತ್ತಾ ನಡೆದನು. ತಂದೆತಾಯಿಗಳ ಹತ್ತಿರ ಬಂದು ಅವರಿಗೆ ಸ್ವಲ್ಪ ಜೇನುತುಪ್ಪವನ್ನು ಕೊಟ್ಟನು. ಅವರೂ ತಿಂದರು. ಆದರೆ ಆ ಸತ್ತಸಿಂಹದ ದೇಹದಿಂದ ಜೇನುತುಪ್ಪವನ್ನು ತೆಗೆದು ಕೊಂಡ ಸಂಗತಿಯನ್ನು ಸಂಸೋನನು ಅವರಿಗೆ ಹೇಳಲಿಲ್ಲ.

10ಸಂಸೋನನ ತಂದೆಯು ಈ ಫಿಲಿಷ್ಟಿಯ ಸ್ತ್ರೀಯನ್ನು ನೋಡುವುದಕ್ಕೆಂದು ಹೋದನು. ಮದುವೆಯ ಗಂಡು ಒಂದು ಔತಣವನ್ನು ಕೊಡುವ ಪದ್ಧತಿ ಇತ್ತು. ಆದುದ ರಿಂದ ಸಂಸೋನನು ಒಂದು ಔತಣವನ್ನು ಏರ್ಪ ಡಿಸಿದನು.
11ಅವನು ಔತಣದ ಏರ್ಪಾಟು ಮಾಡಿದ್ದನ್ನು ಕಂಡು ಫಿಲಿಷ್ಟಿಯರು ಅವನ ಸಂಗಡ ಇರುವುದಕ್ಕೆ ಮೂವತ್ತು ಜನರನ್ನು ಕಳುಹಿಸಿದರು.
12ಆಗ ಸಂಸೋನನು ಆ ಮೂವತ್ತು ಜನರಿಗೆ, ‘‘ನಾನು ನಿಮ ಗೊಂದು ಒಗಟನ್ನು ಹೇಳಬಯಸುತ್ತೇನೆ. ಈ ಔತಣವು ಏಳು ದಿನ ಮುಂದುವರಿಯುತ್ತದೆ. ಈ ಅವಧಿಯಲ್ಲಿ ನೀವು ಉತ್ತರವನ್ನು ಹೇಳುವ ಪ್ರಯತ್ನ ಮಾಡಿರಿ. ನೀವು ಈ ಅವಧಿಯಲ್ಲಿ ಒಗಟುಗಳ ಅರ್ಥ ಹೇಳಿದರೆ ನಾನು ನಿಮಗೆ ಮೂವತ್ತು ನಾರುಬಟ್ಟೆಯ ಅಂಗಿಗಳನ್ನು ಮತ್ತು ಮೂವತ್ತು ವಿಶೇಷ ವಸ್ತ್ರಗಳನ್ನು ಕೊಡುತ್ತೇನೆ.
13ಆದರೆ ಉತ್ತರ ಹೇಳಲು ನಿಮಗೆ ಸಾಧ್ಯವಾಗದಿದ್ದರೆ ನೀವು ನನಗೆ ಮೂವತ್ತು ನಾರುಬಟ್ಟೆಯ ಅಂಗಿಗಳನ್ನು ಮತ್ತು ಮೂವತ್ತು ವಿಶೇಷ ವಸ್ತ್ರಗಳನ್ನು ಕೊಡಬೇಕು’’ ಎಂದು ಹೇಳಿದನು. ಆ ಮೂವತ್ತು ಜನರು, ‘‘ನಮಗೆ ನಿನ್ನ ಒಗಟನ್ನು ಹೇಳು, ನಾವು ಅದನ್ನು ಕೇಳಬಯಸುತ್ತೇವೆ’’ ಎಂದರು.

14ಸಂಸೋನನು ಅವರಿಗೆ ಈ ಒಗಟನ್ನು ಹೇಳಿದನು:

ತಿಂದು ಬಿಡುವಂಥದರಿಂದ ತಿನ್ನತಕ್ಕದ್ದು ದೊರಕಿತು. ಕ್ರೂರವಾದದ್ದರಿಂದ ಮಧುರ ವಾದದ್ದು ಸಿಕ್ಕಿತು.

ಆ ಮೂವತ್ತು ಜನರು ಮೂರು ದಿನಗಳವರೆಗೆ ಒಗಟಿನ ಅರ್ಥವನ್ನು ಕಂಡುಹಿಡಿಯಲು ಪ್ರಯತ್ನ ಮಾಡಿದರು. ಆದರೆ ಅವರಿಂದ ಸಾಧ್ಯವಾಗಲಿಲ್ಲ.

15ನಾಲ್ಕನೆಯ ದಿನ ಅವರು ಸಂಸೋನನ ಹೆಂಡತಿ ಯಲ್ಲಿಗೆ ಬಂದು, ‘‘ನೀನು ನಮ್ಮನ್ನು ಬಡವರನ್ನಾಗಿ ಮಾಡಲು ಇಲ್ಲಿಗೆ ಕರೆದಿರುವಿಯಾ? ನೀನು ನಿನ್ನ ಗಂಡ ನನ್ನು ಮರುಳುಗೊಳಿಸಿ ನಮಗೆ ಒಗಟಿನ ಅರ್ಥವನ್ನು ಹೇಳುವಂತೆ ಮಾಡು. ನೀನು ನಮಗೆ ಒಗಟಿನ ಅರ್ಥ ವನ್ನು ಹೇಳದಿದ್ದರೆ ನಾವು ನಿನ್ನನ್ನು ಮತ್ತು ನಿನ್ನ ತಂದೆಯ ಮನೆಯಲ್ಲಿರುವ ಎಲ್ಲರನ್ನೂ ಸುಟ್ಟು ಹಾಕುತ್ತೇವೆ’’ ಎಂದರು.

16ಸಂಸೋನನ ಹೆಂಡತಿಯು ಅವನ ಹತ್ತಿರ ಹೋಗಿ ಅಳುವುದಕ್ಕೆ ಪ್ರಾರಂಭಿಸಿದಳು. ಅವಳು, ‘‘ನೀನು ನನ್ನನ್ನು ನಿಜವಾಗಿ ಪ್ರೀತಿಸುವುದಿಲ್ಲ, ನನ್ನನ್ನು ದ್ವೇಷಿಸುತ್ತಿ; ನೀನು ನಮ್ಮ ಜನರಿಗೆ ಒಗಟನ್ನು ಹೇಳಿರುವೆ; ಆದರೆ ಅದರ ಅರ್ಥವನ್ನು ನನಗೆ ಹೇಳಿಲ್ಲ’’ ಎಂದು ಗೋಳಾಡ ತೊಡಗಿದಳು.

17ಸಂಸೋನನ ಹೆಂಡತಿಯು ಔತಣದ ಏಳು ದಿನ ಗಳೆಲ್ಲಾ ಅಳುತ್ತಿದ್ದಳು. ಆದುದರಿಂದ ಏಳನೆಯ ದಿನ ಅವನು ಒಗಟಿನ ಅರ್ಥವನ್ನು ಅವಳಿಗೆ ಹೇಳಿದನು. ಅವಳು ಪೀಡಿಸಿದ್ದರಿಂದ ಅವನು ಹೇಳಿದನು. ಆಗ ಅವಳು ತನ್ನ ಜನರಲ್ಲಿಗೆ ಹೋಗಿ ಆ ಒಗಟಿನ ಅರ್ಥವನ್ನು ತಿಳಿಸಿದಳು.

18ಔತಣದ ಏಳನೆಯ ದಿನ ಸೂರ್ಯಾಸ್ತಮಾನಕ್ಕಿಂತ ಮುಂಚೆ ಫಿಲಿಷ್ಟಿಯರಿಗೆ ಅರ್ಥ ಗೊತ್ತಾಯಿತು. ಅವರು ಸಂಸೋನನಲ್ಲಿಗೆ ಬಂದು ಅವನಿಗೆ,

‘‘ಜೇನಿಗಿಂತ ಸಿಹಿಯಾದದ್ದು ಯಾವುದು;
ಸಿಂಹಕ್ಕಿಂತ ಕ್ರೂರವಾದದ್ದು ಯಾವುದು’’
ಎಂದರು.

ಅದಕ್ಕೆ ಸಂಸೋನನು ಅವರಿಗೆ,

‘‘ನೀವು ನನ್ನ ಹಸುವಿನಿಂದ ನೇಗಿಲ ಹೊಡೆಯ ದಿದ್ದರೆ ಒಗಟನ್ನು ಬಿಡಿಸುವುದು ನಿಮ್ಮಿಂದ ಆಗುತ್ತಿರಲಿಲ್ಲ’’ ಎಂದನು.

19ಸಂಸೋನನು ಬಹಳ ಕೋಪಗೊಂಡನು. ಯೆಹೋವನ ಆತ್ಮವು ಸಂಸೋನನ ಮೇಲೆ ಪ್ರಬಲವಾಗಿ ಬಂತು. ಅವನು ಅಷ್ಕೆಲೋನ್ ನಗರಕ್ಕೆ ಧಾವಿಸಿದನು. ಆ ನಗರದಲ್ಲಿ ಅವನು ಮೂವತ್ತು ಜನ ಫಿಲಿಷ್ಟಿಯರನ್ನು ಕೊಂದನು. ಆಮೇಲೆ ಅವನು ಹೆಣಗಳ ಮೇಲಿನ ಎಲ್ಲ ಬಟ್ಟೆಗಳನ್ನೂ ಸ್ವತ್ತನ್ನೂ ಸುಲಿದುಕೊಂಡನು. ಆ ಬಟ್ಟೆ ಗಳನ್ನು ತಂದು ಒಗಟಿನ ಅರ್ಥ ಹೇಳಿದ ಜನರಿಗೆ ಕೊಟ್ಟನು. ಬಳಿಕ ಅವನು ತನ್ನ ತಂದೆಯ ಮನೆಗೆ ಹೋದನು.

20ಸಂಸೋನನು ತನ್ನ ಹೆಂಡತಿಯನ್ನು ಕರೆದುಕೊಂಡು ಹೋಗಲಿಲ್ಲ. ಆಕೆಯ ತಂದೆ ಮೂವತ್ತು ಜನರಲ್ಲಿದ್ದ

ಉತ್ತಮ ಪುರುಷನೊಬ್ಬನಿಗೆ ಅವಳನ್ನು ಕೊಟ್ಟು ಮದುವೆ
ಮಾಡಿದನು.

### ಸಂಸೋನನು ಫಿಲಿಷ್ಟಿಯರನ್ನು ಪೀಡಿಸಿದನು

15 ಗೋಧಿಯ ಸುಗ್ಗಿ ಕಾಲದಲ್ಲಿ ಸಂಸೋನನು ತನ್ನ
ಹೆಂಡತಿಯನ್ನು ನೋಡಲು ಹೋದನು. ಅವನು
ತನ್ನ ಸಂಗಡ ಒಂದು ಮರಿಹೋತವನ್ನು ತೆಗೆದುಕೊಂಡು
ಹೋದನು. ಆಕೆಯ ತಂದೆಗೆ ಅವನು ''ನನ್ನ ಹೆಂಡತಿಯ
ಕೋಣೆಗೆ ಹೋಗಬೇಕು'' ಎಂದನು.

ಆದರೆ ಆಕೆಯ ತಂದೆಯು ಸಂಸೋನನನ್ನು ಒಳಗೆ
ಬಿಡಲಿಲ್ಲ. 2ಅವನು ಸಂಸೋನನಿಗೆ, ''ನೀನು ಅವಳನ್ನು
ದ್ವೇಷಿಸುವೆ ಎಂದು ತಿಳಿದು ಮದುವೆಯಲ್ಲಿ ನಿನ್ನೊಂದಿ
ಗಿದ್ದ ಉತ್ತಮಪುರುಷನೊಬ್ಬನಿಗೆ ಅವಳನ್ನು ಮದುವೆ
ಮಾಡಿಕೊಟ್ಟೆ. ಅವಳ ತಂಗಿಯು ಆಕೆಗಿಂತ ಹೆಚ್ಚು ಸುಂದರಿ
ಯಾಗಿದ್ದಾಳೆ. ಆಕೆಯನ್ನು ನೀನು ಮದುವೆಯಾಗು''
ಎಂದನು. 3ಸಂಸೋನನು ಅವನಿಗೆ, ''ಫಿಲಿಷ್ಟಿಯರಾದ
ನಿಮಗೆ ತೊಂದರೆ ಕೊಡಲು ನನಗೊಂದು ಒಳ್ಳೆಯ
ಕಾರಣ ಸಿಕ್ಕಿತು. ಈಗ ಯಾರೂ ನನ್ನದು ತಪ್ಪೆಂದು ಹೇಳು
ವುದಿಲ್ಲ'' ಎಂದು ಹೇಳಿದನು.

4ಸಂಸೋನನು ಹೊರಗೆ ಹೋಗಿ ಮುನ್ನೂರು ನರಿ
ಗಳನ್ನು ಹಿಡಿದನು. ಅವುಗಳಲ್ಲಿ ಎರಡೆರಡು ನರಿಗಳನ್ನು
ಹಿಡಿದು ಒಂದರ ಬಾಲವನ್ನು ಮತ್ತೊಂದರ ಬಾಲಕ್ಕೆ
ಕಟ್ಟಿದನು. ನರಿಗಳ ಪ್ರತಿಯೊಂದು ಜೋಡಿಯ ಬಾಲಗಳ
ಮಧ್ಯದಲ್ಲಿ ಒಂದು ಪಂಜನ್ನು ಕಟ್ಟಿದನು. 5ಸಂಸೋನನು
ಆ ಪಂಜುಗಳಿಗೆ ಬೆಂಕಿ ಹಚ್ಚಿ ಆ ನರಿಗಳನ್ನು ಫಿಲಿಷ್ಟಿಯರ
ಪೈರುಗಳಿದ್ದ ಹೊಲಗಳಲ್ಲಿ ಓಡಾಡಲು ಬಿಟ್ಟನು. ಈ ರೀತಿ
ಅವನು ಅವರ ಹೊಲಗಳಲ್ಲಿ ಬೆಳೆದ ಪೈರನ್ನೂ ಮತ್ತು
ಅವರು ಕೊಯ್ದುಹಾಕಿದ ತೆನೆಗಳ ಗೂಡನ್ನೂ ಸುಟ್ಟು
ಹಾಕಿದನು. ಅವನು ಅವರ ದ್ರಾಕ್ಷಿಯ ತೋಟಗಳನ್ನು
ಮತ್ತು ಆಲಿವ್ ಮರಗಳನ್ನು ಸುಟ್ಟುಹಾಕಿದನು.

6''ಇದನ್ನು ಮಾಡಿದವರು ಯಾರು?'' ಎಂದು
ಫಿಲಿಷ್ಟಿಯರು ವಿಚಾರಿಸಿದರು.

ಒಬ್ಬನು, ''ತಿಮ್ನಾ ನಗರದವನ ಅಳಿಯನಾದ
ಸಂಸೋನನು ಇದನ್ನು ಮಾಡಿದನು. ಸಂಸೋನನ
ಮಾವನು ಸಂಸೋನನ ಹೆಂಡತಿಯನ್ನು ಮದುವೆಯಲ್ಲಿದ್ದ
ಉತ್ತಮಪುರುಷನೊಬ್ಬನಿಗೆ ಮದುವೆಮಾಡಿ ಕೊಟ್ಟಿದ್ದ
ಕ್ಕಾಗಿ ಅವನು ಹೀಗೆಲ್ಲಾ ಮಾಡಿದನು'' ಎಂದು ಹೇಳಿ
ದನು. ಆಗ ಫಿಲಿಷ್ಟಿಯರು ಸಂಸೋನನ ಹೆಂಡತಿಯನ್ನು
ಮತ್ತು ಅವಳ ತಂದೆಯನ್ನು ಸುಟ್ಟುಹಾಕಿದರು.

7ಸಂಸೋನನು ಫಿಲಿಷ್ಟಿಯರಿಗೆ, ''ನೀವು ನನಗೆ ಈ
ದುಷ್ಕೃತ್ಯವನ್ನು ಮಾಡಿರುವುದರಿಂದ ನಾನೂ ನಿಮಗೆ
ಕೇಡನ್ನು ಮಾಡುತ್ತೇನೆ'' ಎಂದು ಹೇಳಿ,

8ಅವರ ಮೇಲೆ ಆಕ್ರಮಣ ಮಾಡಿ ಅವರಲ್ಲಿ ಅನೇಕ
ರನ್ನು ಕೊಂದುಹಾಕಿದನು. ಆಮೇಲೆ ಅವನು ಹೋಗಿ
ಒಂದು ಗುಹೆಯಲ್ಲಿ ಇದ್ದುಬಿಟ್ಟನು. ಆ ಗುಹೆಯು
ಏತಾಮಿನ ಬಂಡೆಯ ಬಳಿಯಲ್ಲಿತ್ತು.

9ಆಗ ಫಿಲಿಷ್ಟಿಯರು ಯೆಹೂದಕ್ಕೆ ಹೋಗಿ, ಅವರು
ಲೆಹೀ ಎಂಬ ಸ್ಥಳದ ಬಳಿ ಪಾಳೆಯಮಾಡಿಕೊಂಡರು
ಮತ್ತು ಯುದ್ಧದ ಸಿದ್ಧತೆ ಮಾಡತೊಡಗಿದರು.
10ಯೆಹೂದ್ಯರು ಅವರಿಗೆ, ''ಫಿಲಿಷ್ಟಿಯರಾದ ನೀವು
ನಮ್ಮ ಸಂಗಡ ಯುದ್ಧ ಮಾಡುವುದಕ್ಕೆ ಇಲ್ಲಿಗೇಕೆ ಬಂದಿ
ದ್ದೀರಿ?'' ಎಂದು ಕೇಳಿದರು.

ಅದಕ್ಕೆ ಅವರು, ''ನಾವು ಸಂಸೋನನನ್ನು ಹಿಡಿಯಲು
ಬಂದಿದ್ದೇವೆ. ನಾವು ಅವನನ್ನು ಬಂಧಿಸಬೇಕಾಗಿದೆ.
ಅವನು ನಮ್ಮ ಜನರಿಗೆ ಮಾಡಿದ ದ್ರೋಹಕ್ಕಾಗಿ ಅವನನ್ನು
ಶಿಕ್ಷಿಸಬೇಕು'' ಎಂದು ಉತ್ತರಕೊಟ್ಟರು.

11ಆಗ ಯೆಹೂದಕುಲದ ಮೂರು ಸಾವಿರ ಜನರು
ಸಂಸೋನನಲ್ಲಿಗೆ ಹೋದರು. ಅವರು ಏತಾಮಿನ
ಬಂಡೆಯ ಬಳಿಯಲ್ಲಿದ್ದ ಗುಹೆಗೆ ಬಂದು ಅವನಿಗೆ,
''ನೀನು ನಮಗೆ ಮಾಡಿರುವುದೇನು? ಫಿಲಿಷ್ಟಿಯರು
ನಮ್ಮನ್ನು ಆಳುತ್ತಿದ್ದಾರೆ ಎಂಬುದು ನಿನಗೆ ಗೊತ್ತಿಲ್ಲವೇ?''
ಎಂದು ಕೇಳಿದರು.

ಸಂಸೋನನು, ''ಅವರು ನನಗೆ ಮಾಡಿದ ದ್ರೋಹ
ಕ್ಕಾಗಿ ನಾನು ಅವರನ್ನು ಶಿಕ್ಷಿಸಿದೆ'' ಎಂದನು.

12ಆಗ ಅವರು ಸಂಸೋನನಿಗೆ, ''ನಾವು ನಿನ್ನನ್ನು
ಬಂಧಿಸಲು ಬಂದಿದ್ದೇವೆ. ನಾವು ನಿನ್ನನ್ನು ಫಿಲಿಷ್ಟಿಯರಿಗೆ
ಕೊಡುತ್ತೇವೆ'' ಎಂದರು.

ಸಂಸೋನನು ಯೆಹೂದ್ಯರಿಗೆ, ''ನೀವು ನನ್ನನ್ನು
ಕೊಲ್ಲುವುದಿಲ್ಲವೆಂದು ಆಣೆಮಾಡಿರಿ'' ಅಂದನು.

13ಯೆಹೂದ್ಯರು, ''ಆಗಲಿ, ನಾವು ನಿನ್ನನ್ನು ಬಂಧಿಸಿ
ಫಿಲಿಷ್ಟಿಯರಿಗೆ ಕೊಡುತ್ತೇವೆ. ನಾವು ನಿನ್ನನ್ನು ಕೊಲ್ಲುವು
ದಿಲ್ಲವೆಂದು ಆಣೆಮಾಡುತ್ತೇವೆ'' ಎಂದು ಹೇಳಿದರು.
ಅವರು ಸಂಸೋನನನ್ನು ಎರಡು ಹೊಸ ಹಗ್ಗಗಳಿಂದ
ಬಂಧಿಸಿ ಗುಹೆಯಿಂದ ಹೊರಕರೆತಂದರು.

14ಸಂಸೋನನನ್ನು ಲೆಹೀ ಎಂಬ ಸ್ಥಳಕ್ಕೆ ತಂದಾಗ ಫಿಲಿಷ್ಟಿ
ಯರು ಅವನನ್ನು ನೋಡುವದಕ್ಕೆ ಬಂದರು. ಅವರು
ಸಂತೋಷದಿಂದ ಆರ್ಭಟಿಸುತ್ತಿದ್ದರು. ಆಗ ಯೆಹೋವನ
ಆತ್ಮವು ಪ್ರಬಲವಾಗಿ ಸಂಸೋನನ ಮೇಲೆ ಬಂದಿತು.
ಸಂಸೋನನು ಹಗ್ಗಗಳನ್ನು ಸುಟ್ಟದಾರಗಳೋ ಎಂಬಂತೆ
ಕಿತ್ತು ಹಾಕಿದನು; ಕೈಗೆ ಕಟ್ಟಿದ್ದ ಹಗ್ಗಗಳು ಕಳಚಿಬಿದ್ದವು.
15ಸಂಸೋನನು ಸತ್ತಕತ್ತೆಯ ದವಡೇ ಎಲುಬನ್ನು
ಕಂಡನು. ಅವನು ಆ ದವಡೇ ಎಲುಬನ್ನು ತೆಗೆದುಕೊಂಡು
ಅದರಿಂದ ಒಂದು ಸಾವಿರ ಫಿಲಿಷ್ಟಿಯರನ್ನು ಕೊಂದು
ಹಾಕಿದನು. 16ಆಗ ಸಂಸೋನನು,

''ಕತ್ತೆಯ ದವಡೇ ಎಲುಬಿನಿಂದ ನಾನು ಒಂದು
ಸಾವಿರ ಜನರನ್ನು ಕೊಂದೆನು, ಕತ್ತೆಯ ದವಡೇ

ಎಲುಬಿನಿಂದ ಹೆಣಗಳನ್ನು ರಾಶಿರಾಶಿಯಾಗಿ
ಬೀಳಿಸಿದೆನು'' ಅಂದನು.

17ಬಳಿಕ ಸಂಸೋನನು ದವಡೇ ಎಲುಬನ್ನು ಬಿಸಾಡಿ
ದನು. ಆದುದರಿಂದ ಆ ಸ್ಥಳಕ್ಕೆ ರಾಮತ್‌ಲೆಹೀ* ಎಂದು
ಹೆಸರಾಯಿತು.
18ಸಂಸೋನನಿಗೆ ತುಂಬ ನೀರಡಿಕೆಯಾಗಿತ್ತು. ಅವನು
ಯೆಹೋವನಿಗೆ, ''ನಾನು ನಿನ್ನ ಸೇವಕನಾಗಿದ್ದೇನೆ. ನೀನು
ನನಗೆ ಈ ಮಹಾ ವಿಜಯವನ್ನು ಕೊಟ್ಟಿರುವೆ. ದಯವಿಟ್ಟು
ಈಗ ನಾನು ನೀರಡಿಕೆಯಿಂದ ಸಾಯಲು ಬಿಡಬೇಡ.
ಸುನ್ನತಿ ಮಾಡಿಸಿಕೊಂಡಿಲ್ಲದವರು ನನ್ನನ್ನು ಹಿಡಿದು
ಕೊಡುವಂತೆ ಮಾಡಬೇಡ'' ಎಂದು ಪ್ರಾರ್ಥಿಸಿದನು.
19ಲೆಹೀಯ ನೆಲದಲ್ಲಿ ಒಂದು ಸುರಂಗವಿದೆ. ಆತನು
ಆ ಸುರಂಗವನ್ನು ಸೀಳಿ ಅದರೊಳಗಿಂದ ನೀರು ಬರು
ವಂತೆ ಮಾಡಿದನು. ಸಂಸೋನನು ನೀರು ಕುಡಿದು ಚೈತನ್ಯ
ಪಡೆದನು. ಆದುದರಿಂದ ಅವನು ಆ ನೀರಿನ ಬುಗ್ಗೆಗೆ
ಏನ್ ಹಕ್ಕೋರೇ* ಎಂದು ಕರೆದನು. ಅದು ಇಂದಿಗೂ
ಲೆಹೀ ನಗರದಲ್ಲಿ ಇದೆ.
20ಸಂಸೋನನು ಇಪ್ಪತ್ತು ವರ್ಷ ಇಸ್ರೇಲರ ನ್ಯಾಯಾ
ಧೀಶನಾಗಿದ್ದನು. ಅದು ಫಿಲಿಷ್ಟಿಯರ ಕಾಲವಾಗಿತ್ತು.

## ಸಂಸೋನನು ಗಾಜಕ್ಕೆ ಹೋದನು

16 ಒಂದು ದಿನ ಸಂಸೋನನು ಗಾಜ ನಗರಕ್ಕೆ
ಹೋದನು. ಅವನು ಅಲ್ಲಿ ಒಬ್ಬ ವೇಶ್ಯೆಯನ್ನು
ಕಂಡು ಆ ರಾತ್ರಿ ಅವಳೊಂದಿಗಿರಲು ಅವಳ ಮನೆಯೊಳಗೆ
ಹೋದನು. 2ಯಾರೋ ಒಬ್ಬರು, ''ಸಂಸೋನನು
ಇಲ್ಲಿಗೆ ಬಂದಿದ್ದಾನೆ'' ಎಂದು ಗಾಜದ ಜನರಿಗೆ ಹೇಳಿ
ದರು. ಅವರು ಅವನನ್ನು ಕೊಲ್ಲಬೇಕೆಂದಿದ್ದರು. ಅದ
ಕ್ಕಾಗಿ ಅವರು ಆ ಸ್ಥಳವನ್ನು ಸುತ್ತುಗಟ್ಟಿದರು. ನಗರದ
ಬಾಗಿಲುಗಳನ್ನು ಭದ್ರಪಡಿಸಿ ಅಡಗಿಕೊಂಡು
ಸಂಸೋನನ ದಾರಿಕಾಯ್ದರು. ಇಡೀ ರಾತ್ರಿ ಅವರು
ನಗರದ ಬಾಗಿಲಲ್ಲಿ ಸುಮ್ಮನಿದ್ದರು. ''ಬೆಳಗಾದ ಮೇಲೆ
ನಾವು ಸಂಸೋನನನ್ನು ಕೊಲ್ಲೋಣ'' ಎಂದು ತಮ್ಮ
ತಮ್ಮಲ್ಲಿ ಮಾತನಾಡಿಕೊಂಡರು.
3ಆದರೆ ಸಂಸೋನನು ಆ ವೇಶ್ಯೆಯ ಜೊತೆಯಲ್ಲಿ
ಮಧ್ಯರಾತ್ರಿಯವರೆಗೆ ಮಾತ್ರ ಇದ್ದನು. ಸಂಸೋನನು
ಮಧ್ಯರಾತ್ರಿಯಲ್ಲಿ ಎದ್ದುಬಿಟ್ಟನು. ಸಂಸೋನನು ನಗರ
ದ್ವಾರದ ಬಾಗಿಲನ್ನು ಗಟ್ಟಿಯಾಗಿ ಹಿಡಿದು ಎಳೆದನು.
ಕದಗಳು ಗೋಡೆಗಳಿಂದ ಕಿತ್ತುಬಂದವು. ಸಂಸೋನನು
ಬಾಗಿಲಕದಗಳನ್ನೂ ಅದರ ನಿಲುವು ಪಟ್ಟಿಗಳನ್ನೂ ಅಗುಳಿ
ಗಳನ್ನೂ ತನ್ನ ಹೆಗಲ ಮೇಲೆ ಹೊತ್ತು ಹೆಬ್ರೋನ್ ನಗರದ
ಹತ್ತಿರವಿರುವ ಪರ್ವತ ಶಿಖರಕ್ಕೆ ತೆಗೆದುಕೊಂಡು
ಹೋದನು.

## ಸಂಸೋನ ಮತ್ತು ದೆಲೀಲಾ

4ತರುವಾಯ ಸಂಸೋನನು ದೆಲೀಲಾ ಎಂಬ
ಸ್ತ್ರೀಯನ್ನು ಪ್ರೀತಿಸಿದನು. ಅವಳು ಸೋರೇಕ್
ಕಣಿವೆಯವಳು.
5ಫಿಲಿಷ್ಟಿಯ ಪ್ರಭುಗಳು ದೆಲೀಲಳ ಬಳಿಗೆ ಹೋಗಿ,
''ಸಂಸೋನನು ಅಷ್ಟೊಂದು ಶಕ್ತಿಶಾಲಿಯಾಗಿರುವುದಕ್ಕೆ
ಕಾರಣಗಳನ್ನು ನಾವು ತಿಳಿದುಕೊಳ್ಳಬೇಕಾಗಿದೆ. ಅವನನ್ನು
ಮರುಳುಗೊಳಿಸಿ ಅವನ ರಹಸ್ಯವನ್ನು ತಿಳಿದುಕೊಳ್ಳಲು
ಪ್ರಯತ್ನಮಾಡು. ಆಗ ನಾವು ಅವನನ್ನು ಸೋಲಿಸಿ,
ಬಂಧಿಸಿ ನಮ್ಮ ಅಧೀನದಲ್ಲಿಟ್ಟುಕೊಳ್ಳಲು ಸಾಧ್ಯವಾಗು
ತ್ತದೆ. ನೀನು ಇದನ್ನು ಮಾಡಿದರೆ ನಮ್ಮಲ್ಲಿ ಪ್ರತಿ
ಯೊಬ್ಬರೂ ನಿನಗೆ ಇಪ್ಪತ್ತೆಂಟು ಬೆಳ್ಳಿನಾಣ್ಯಗಳನ್ನು
ಕೊಡುತ್ತೇವೆ''ಎಂದು ಹೇಳಿದರು.
6ದೆಲೀಲಳು ಸಂಸೋನನಿಗೆ, ''ನಿನಗೆ ಇಂಥ ಮಹಾಶಕ್ತಿ
ಹೇಗೆ ಬಂತು? ನಿನ್ನನ್ನು ನಿರ್ಬಲಗೊಳಿಸಿ ಬಂಧಿಸುವುದು
ಹೇಗೆ?'' ಎಂದು ಕೇಳಿದಳು.
7ಅದಕ್ಕೆ ಸಂಸೋನನು, ''ಬಿಲ್ಲಿನ ಹೊಸತಂತಿಗಳಿಂದ
ನನ್ನನ್ನು ಕಟ್ಟಿದರೆ ನಾನು ಬೇರೆ ಮನುಷ್ಯರಂತೆ ಬಲಹೀನ
ನಾಗುತ್ತೇನೆ'' ಎಂದು ಉತ್ತರಿಸಿದನು.
8ಆಗ ಫಿಲಿಷ್ಟಿಯ ಅಧಿಪತಿಗಳು ದೆಲೀಲಳಿಗೆ ಬಿಲ್ಲಿನ
ಏಳು ಹೊಸ ತಂತಿಗಳನ್ನು ತಂದುಕೊಟ್ಟರು. ಅವು ಇನ್ನೂ
ಒಣಗಿರಲಿಲ್ಲ. ದೆಲೀಲಳು ಸಂಸೋನನನ್ನು ಬಿಲ್ಲಿನ ಆ
ತಂತಿಗಳಿಂದ ಬಿಗಿದುಕಟ್ಟಿದಳು. 9ಪಕ್ಕದ ಕೋಣೆಯಲ್ಲಿ
ಕೆಲವು ಜನ ಅಡಗಿಕೊಂಡಿದ್ದರು. ಆಗ ದೆಲೀಲಳು
ಸಂಸೋನನಿಗೆ, ''ಸಂಸೋನನೇ, ಫಿಲಿಷ್ಟಿಯರು ನಿನ್ನನ್ನು
ಬಂಧಿಸಲಿದ್ದಾರೆ'' ಎಂದು ಹೇಳಿದಳು. ಆದರೆ
ಸಂಸೋನನು ಸುಲಭವಾಗಿ ಆ ಬಿಲ್ಲಿನ ತಂತಿಗಳನ್ನು ಕಿತ್ತು
ಹಾಕಿದನು; ಸುಟ್ಟ ದಾರದಿಂದ ಬೂದಿ ಉದುರಿ
ಬೀಳುವಂತೆ ಆ ತಂತಿಗಳು ಕಿತ್ತುಬಿದ್ದವು. ಹೀಗಾಗಿ ಫಿಲಿಷ್ಟಿ
ಯರಿಗೆ ಸಂಸೋನನ ಬಲದ ರಹಸ್ಯ ತಿಳಿಯಲಿಲ್ಲ.
10ಆಗ ದೆಲೀಲಳು ಸಂಸೋನನಿಗೆ, ''ನೀನು ನನಗೆ
ಸುಳ್ಳು ಹೇಳಿದೆ, ನನ್ನನ್ನು ವಂಚಿಸಿದೆ. ನಿನ್ನನ್ನು ಬಂಧಿಸು
ವದು ಹೇಗೆಂಬುದನ್ನು ದಯವಿಟ್ಟು ಹೇಳು'' ಎಂದು
ಕೇಳಿದಳು.
11ಅದಕ್ಕೆ ಸಂಸೋನನು, ''ಎಂದೂ ಉಪಯೋಗಿಸದ
ಹೊಸ ಹಗ್ಗಗಳಿಂದ ನನ್ನನ್ನು ಕಟ್ಟಿದರೆ ನಾನು ಬೇರೆಯವ
ರಂತೆ ನಿರ್ಬಲನಾಗುತ್ತೇನೆ'' ಎಂದನು.
12ದೆಲೀಲಳು ಕೆಲವು ಹೊಸ ಹಗ್ಗಗಳನ್ನು ತೆಗೆದು
ಕೊಂಡು ಸಂಸೋನನನ್ನು ಬಿಗಿದುಕಟ್ಟಿದಳು. ಕೆಲವು
ಜನರು ಪಕ್ಕದ ಕೋಣೆಯಲ್ಲಿ ಅಡಗಿಕೊಂಡಿದ್ದರು.

---

**ರಾಮತ್ ಲೆಹೀ** ಇದರರ್ಥ ''ದವಡೆ ಎಲುಬಿನ ದಿಬ್ಬ.''

**ಏನ್ ಹಕ್ಕೋರೇ** ಇದರರ್ಥ ''ಕರೆದವನ ಬುಗ್ಗೆ.''

ದೆಲೀಲಳು, ''ಸಂಸೋನನೇ, ಫಿಲಿಷ್ಟಿಯರು ನಿನ್ನನ್ನು ಬಂಧಿಸಲಿದ್ದಾರೆ'' ಎಂದು ಕೂಗಿದಳು. ಆದರೆ ಅವನು ದಾರಗಳನ್ನು ಕಿತ್ತುಹಾಕುವಂತೆ ಆ ಹಗ್ಗಗಳನ್ನು ಸುಲಭ ವಾಗಿ ಕಿತ್ತುಹಾಕಿದನು.

[13]ಆಗ ದೆಲೀಲಳು ಸಂಸೋನನಿಗೆ, ''ನೀನು ನನಗೆ ಪುನಃ ಸುಳ್ಳು ಹೇಳಿದೆ. ನೀನು ನನ್ನನ್ನು ವಂಚಿಸಿದೆ. ನಿನ್ನನ್ನು ಬಂಧಿಸುವುದು ಹೇಗೆಂಬುದನ್ನು ಈಗ ನನಗೆ ತಿಳಿಸು'' ಎಂದು ಕೇಳಿದಳು.

ಸಂಸೋನನು, ''ನನ್ನ ತಲೆಗೂದಲಿನ ಏಳು ಜಡೆಗಳನ್ನು ಮಗ್ಗದಲ್ಲಿ ನೇಯ್ದು ಕಟ್ಟಿದರೆ ನಾನು ಬೇರೆ ಮನುಷ್ಯರಂತೆ ದುರ್ಬಲನಾಗುತ್ತೇನೆ'' ಎಂದು ಹೇಳಿದನು.

ಸಂಸೋನನು ಮಲಗಿಕೊಂಡಿರುವಾಗ ದೆಲೀಲಳು ಅವನ ತಲೆಗೂದಲಿನ ಏಳು ಜಡೆಗಳನ್ನು ಮಗ್ಗದಲ್ಲಿ
ನೇಯ್ದಳು. [14]ಆಮೇಲೆ ಆ ಮಗ್ಗವನ್ನು ಒಂದು ಗೂಟ
ದಿಂದ ಭದ್ರಪಡಿಸಿದಳು. ಬಳಿಕ, ''ಸಂಸೋನನೇ, ಫಿಲಿಷ್ಟಿಯರು ನಿನ್ನನ್ನು ಬಂಧಿಸಲಿದ್ದಾರೆ'' ಎಂದು ಮತ್ತೆ ಕೂಗಿಕೊಂಡಳು. ಸಂಸೋನನು ಗೂಟವನ್ನೂ ಮಗ್ಗವನ್ನೂ ಲಾಳಿಯನ್ನೂ ಕಿತ್ತುಹಾಕಿದನು.

[15]ಆಗ ದೆಲೀಲಳು ಸಂಸೋನನಿಗೆ, '''ನಾನು ನಿನ್ನನ್ನು ಪ್ರೀತಿಸುತ್ತೇನೆ' ಎಂದು ನೀನು ಹೇಗೆ ಹೇಳಲು ಸಾಧ್ಯ? ನನ್ನನ್ನು ನೀನು ನಂಬುವುದೇ ಇಲ್ಲ. ನೀನು ನನಗೆ ನಿನ್ನ ರಹಸ್ಯವನ್ನು ತಿಳಿಸುವುದಿಲ್ಲ. ಮೂರನೆಯ ಸಲ ನೀನು ನನ್ನನ್ನು ವಂಚಿಸಿದೆ. ನೀನು ನನಗೆ ನಿನ್ನ ಶಕ್ತಿಯ ರಹಸ್ಯ
ವನ್ನು ತಿಳಿಸಲಿಲ್ಲ'' ಎಂದಳು. [16]ಅವಳು ಸಂಸೋನನನ್ನು
ಪ್ರತಿದಿನ ಪೀಡಿಸತೊಡಗಿದಳು. ಅವನ ಶಕ್ತಿಯ ರಹಸ್ಯದ ಬಗ್ಗೆ ಅವಳು ಪದೇಪದೇ ಕೇಳುತ್ತಿದ್ದದರಿಂದ ಅವನಿಗೆ
ಸಾಯುವಷ್ಟು ಬೇಸರವಾಯಿತು. [17]ಕೊನೆಗೆ
ಸಂಸೋನನು ದೆಲೀಲಳಿಗೆ ಎಲ್ಲವನ್ನು ಹೇಳಿದನು. ''ನಾನೆಂದೂ ನನ್ನ ತಲೆಗೂದಲನ್ನು ಕತ್ತರಿಸಿಕೊಂಡಿಲ್ಲ. ನಾನು ಹುಟ್ಟುವ ಮೊದಲೇ ನನ್ನನ್ನು ದೇವರಿಗೆ ಅರ್ಪಿಸಲಾಗಿತ್ತು. ಯಾರಾದರೂ ನನ್ನ ತಲೆಬೋಳಿಸಿದರೆ ನಾನು ನನ್ನ ಶಕ್ತಿಯನ್ನು ಕಳೆದುಕೊಳ್ಳುತ್ತೇನೆ. ನಾನು ಬೇರೆ ಮನುಷ್ಯರಷ್ಟೇ ದುರ್ಬಲನಾಗುತ್ತೇನೆ'' ಎಂದು ಹೇಳಿದನು.

[18]ಸಂಸೋನನು ತನ್ನ ರಹಸ್ಯವನ್ನು ತಿಳಿಸಿದನೆಂದು ದೆಲೀಲಳಿಗೆ ಗೊತ್ತಾಯಿತು. ಅವಳು ಫಿಲಿಷ್ಟಿಯ ಅಧಿಪತಿಗಳಿಗೆ ಸಂದೇಶವನ್ನು ಕಳುಹಿಸಿದಳು. ಅವಳು, ''ಸಂಸೋನನು ನನಗೆ ಎಲ್ಲವನ್ನು ಹೇಳಿದ್ದಾನೆ, ಮತ್ತೊಮ್ಮೆ ಬನ್ನಿ'' ಎಂದು ಹೇಳಿದಳು. ಫಿಲಿಷ್ಟಿಯ ಅಧಿಪತಿಗಳು ದೆಲೀಲಳ ಬಳಿಗೆ ಬಂದರು. ಅವರು ಅವಳಿಗೆ ಕೊಡುವುದಾಗಿ ಹೇಳಿದ್ದ ಹಣವನ್ನು ತಂದಿದ್ದರು.

[19]ಸಂಸೋನನು ಅವಳ ತೊಡೆಯ ಮೇಲೆ ಮಲಗಿ ನಿದ್ರೆ ಮಾಡಿದನು. ಆಗ ಅವಳು ಸಂಸೋನನ ಜಡೆಗಳನ್ನು ಬೋಳಿಸಲು ಒಬ್ಬ ಮನುಷ್ಯನನ್ನು ಒಳಗೆ ಕರೆದಳು. ಅವನು ಕೂದಲನ್ನು ಬೋಳಿಸಲು, ಅವನು ಇತರರಂತೆ
ದುರ್ಬಲನಾದನು [20]ಆಮೇಲೆ ದೆಲೀಲಳು ಅವನನ್ನು,
''ಸಂಸೋನನೇ, ಫಿಲಿಷ್ಟಿಯರು ನಿನ್ನನ್ನು ಬಂಧಿಸಲಿದ್ದಾರೆ'' ಎಂದು ಕೂಗಿದಳು. ಅವನು ಎಚ್ಚೆತ್ತನು. ''ಮುಂಚಿನಂತೆಯೇ ನಾನು ತಪ್ಪಿಸಿಕೊಳ್ಳುವೆನು'' ಎಂದು ಅವನು ತಿಳಿದಿದ್ದನು. ಆದರೆ ಯೆಹೋವನು ಅವನನ್ನು ಬಿಟ್ಟುಹೋಗಿದ್ದಾನೆಂಬುದು ಅವನಿಗೆ ಗೊತ್ತಾಗಲಿಲ್ಲ.

[21]ಫಿಲಿಷ್ಟಿಯರು ಸಂಸೋನನನ್ನು ಬಂಧಿಸಿ ಅವನ ಕಣ್ಣುಗಳನ್ನು ಕಿತ್ತು ಗಾಜ ನಗರಕ್ಕೆ ತೆಗೆದುಕೊಂಡು ಹೋದರು. ಅವನು ಓಡಿಹೋಗದಂತೆ ಅವನಿಗೆ ಸಂಕೋಲೆಗಳನ್ನು ಬಿಗಿದರು. ಅವರು ಸಂಸೋನನನ್ನು ಒಂದು ಸೆರೆಮನೆ
ಯಲ್ಲಿಟ್ಟು ಧಾನ್ಯಬೀಸುವ ಕೆಲಸಕ್ಕೆ ಹಚ್ಚಿದರು. [22]ಆದರೆ
ಸಂಸೋನನ ಕೂದಲುಗಳು ಪುನಃ ಬೆಳೆಯತೊಡಗಿದವು.

[23]ಫಿಲಿಷ್ಟಿಯ ಅಧಿಪತಿಗಳು ಒಂದು ಉತ್ಸವವನ್ನು ಮಾಡಲು ಸೇರಿಬಂದಿದ್ದರು. ಅವರು ತಮ್ಮ ದೇವರಾದ ದಾಗೋನನಿಗೆ* ಒಂದು ಮಹಾಯಜ್ಞವನ್ನು ಸಮರ್ಪಿಸಬೇಕೆಂದಿದ್ದರು. ''ನಮ್ಮ ಶತ್ರುವಾದ ಸಂಸೋನನನ್ನು ಸೋಲಿಸಲು ನಮ್ಮ ದೇವರು ನಮಗೆ ಸಹಾಯ ಮಾಡಿ
ದನು'' ಎಂದು ಅವರು ಭಾವಿಸಿದ್ದರು. [24]ಫಿಲಿಷ್ಟಿಯರು
ಸಂಸೋನನನ್ನು ನೋಡಿದ ಕೂಡಲೇ ತಮ್ಮ ದೇವರನ್ನು ಸ್ತುತಿಸಿದರು. ಅವರು,

ಇವನು ನಮ್ಮ ಜನರನ್ನು ಹಾಳುಮಾಡಿದನು.
ಇವನು ನಮ್ಮ ಅನೇಕ ಜನರನ್ನು ಕೊಂದನು.
ಆದರೆ ನಮ್ಮ ದೇವರು ನಮ್ಮ ಶತ್ರುವನ್ನು
ಸೆರೆಹಿಡಿಯಲು ಸಹಾಯ ಮಾಡಿದನು ಎಂದು
ಹಾಡಿದರು.

[25]ಆ ಉತ್ಸವದಲ್ಲಿ ಜನರು ಸಂತೋಷವಾಗಿದ್ದರು. ಅವರು, ''ಸಂಸೋನನನ್ನು ಕರೆದು ತನ್ನಿ. ನಾವು ಅವನ ತಮಾಷೆಯನ್ನು ನೋಡಬೇಕು'' ಎಂದರು. ಅವರು ಸಂಸೋನನನ್ನು ಸೆರೆಮನೆಯಿಂದ ತಂದು ಅವನನ್ನು ಅಪಹಾಸ್ಯ ಮಾಡಿದರು. ಸಂಸೋನನನ್ನು ಅವರ ದೇವರಾದ ದಾಗೋನನ ಮಂದಿರದಲ್ಲಿ ಎರಡು ಕಂಬಗಳ ಮಧ್ಯದಲ್ಲಿ
ನಿಲ್ಲಿಸಿದರು. [26]ಒಬ್ಬ ಸೇವಕನು ಸಂಸೋನನ ಕೈಯನ್ನು
ಹಿಡಿದುಕೊಂಡಿದ್ದನು. ''ಈ ಮಂದಿರಕ್ಕೆ ಆಧಾರವಾಗಿರುವ ಕಂಬಗಳ ಹತ್ತಿರ ನನ್ನನ್ನು ಕರೆದುಕೊಂಡು ಹೋಗು. ನಾನು ಅವುಗಳಿಗೆ ಒರಗಿಕೊಳ್ಳುತ್ತೇನೆ''ಎಂದು ಸಂಸೋನನು ಅವನನ್ನು ಕೇಳಿಕೊಂಡನು.

---

**ದಾಗೋನ** ಕಾನಾನ್ಯರು ಈ ಸುಳ್ಳು ದೇವರನ್ನು ಪೂಜಿಸುತ್ತಿದ್ದರು. ಒಳ್ಳೆ ಬೆಳೆಕೊಡುವ ದೇವರೆಂದು ಅವರ ಭಾವನೆಯಾಗಿತ್ತು. ಫಿಲಿಷ್ಟಿಯರ ಮುಖ್ಯವಾದ ದೇವರು.

[27]ಆ ಮಂದಿರದಲ್ಲಿ ಗಂಡಸರು ಹೆಂಗಸರು ಕಿಕ್ಕಿರಿದು
ನೆರೆದಿದ್ದರು. ಫಿಲಿಷ್ಟಿಯರ ಅಧಿಪತಿಗಳೆಲ್ಲರೂ ಅಲ್ಲಿ
ದ್ದರು. ಮಾಳಿಗೆಯ ಮೇಲೆ ಸುಮಾರು ಮೂರು ಸಾವಿರ
ಹೆಂಗಸರು ಮತ್ತು ಗಂಡಸರು ಇದ್ದರು. ಅವರು ನಕ್ಕು
ಸಂಸೋನನನ್ನು ಅಪಹಾಸ್ಯ ಮಾಡುತ್ತಿದ್ದರು. [28]ಆಗ
ಸಂಸೋನನು ಯೆಹೋವನಿಗೆ, ''ಸರ್ವಶಕ್ತನಾದ
ಯೆಹೋವನೇ, ನನ್ನ ಕಡೆಗೆ ಗಮನಹರಿಸು. ದೇವರೇ,
ದಯವಿಟ್ಟು ನನಗಿನ್ನೊಂದು ಸಲ ಶಕ್ತಿಯನ್ನು ಕೊಡು.
ಫಿಲಿಷ್ಟಿಯರು ನನ್ನ ಎರಡು ಕಣ್ಣುಗಳನ್ನು ಕಿತ್ತುಹಾಕಿದ್ದಕ್ಕೆ
ಇದೊಂದು ಸಲ ಅವರನ್ನು ಶಿಕ್ಷಿಸುತ್ತೇನೆ'' ಎಂದು ಬೇಡಿ
ಕೊಂಡನು. [29]ಆಮೇಲೆ ಸಂಸೋನನು ಇಡೀ ಮಂದಿರಕ್ಕೆ
ಆಧಾರವಾಗಿದ್ದ ಎರಡು ಕಂಬಗಳ ಮಧ್ಯದಲ್ಲಿ ನಿಂತು
ಕೊಂಡನು. ಒಂದು ಕಂಬವನ್ನು ಬಲಗೈಯಿಂದಲೂ
ಇನ್ನೊಂದು ಕಂಬವನ್ನು ಎಡಗೈಯಿಂದಲೂ ಹಿಡಿದು,
[30]''ಈ ಫಿಲಿಷ್ಟಿಯರ ಜೊತೆ ನಾನೂ ಸಾಯಲು ಸಿದ್ಧ''
ಎಂದು ಹೇಳಿ ಆ ಎರಡೂ ಕಂಬಗಳನ್ನು ತನ್ನ ಎಲ್ಲಾ
ಶಕ್ತಿಯಿಂದ ಎಳೆಯುತ್ತಾ ಬಾಗಿದನು. ಆಗ ಮಂದಿರವು
ಅಧಿಪತಿಗಳ ಮೇಲೂ ಅಲ್ಲಿದ್ದ ಜನರೆಲ್ಲರ ಮೇಲೂ
ಕುಸಿದುಬಿತ್ತು. ಈ ಪ್ರಕಾರ ಸಂಸೋನನು ತಾನು ಜೀವ
ದಿಂದಿದ್ದಾಗ ಕೊಂದ ಜನರಿಗಿಂತ ಹೆಚ್ಚು ಜನರನ್ನು ತಾನು
ಸಾಯುವಾಗ ಕೊಂದನು.

[31]ಸಂಸೋನನ ಸಹೋದರರು ಮತ್ತು ಅವನ ತಂದೆಯ
ಕುಟುಂಬದವರೆಲ್ಲರು ಬಂದು ಅವನ ದೇಹವನ್ನು ತೆಗೆದು
ಕೊಂಡು ಹೋಗಿ ಅವನ ತಂದೆಯ ಸಮಾಧಿಯಲ್ಲಿ
ಹೂಳಿದರು. ಅವನ ತಂದೆಯ ಹೆಸರು ಮಾನೋಹ. ಆ
ಸಮಾಧಿಯು ಚೊರ್ಗಕ್ಕೂ ಮತ್ತು ಎಷ್ಟಾವೋಲಿಗೂ
ಮಧ್ಯದಲ್ಲಿದೆ. ಸಂಸೋನನು ಇಪ್ಪತ್ತು ವರ್ಷ ಇಸ್ರೇಲರ
ನ್ಯಾಯಾಧೀಶನಾಗಿದ್ದನು.

### ಮೀಕನ ವಿಗ್ರಹಗಳು

17 ಎಫ್ರಾಯೀಮ್ ಬೆಟ್ಟದ ಸೀಮೆಯಲ್ಲಿ ಮೀಕ
ಎಂಬ ಮನುಷ್ಯನಿದ್ದನು. [2]ಮೀಕನು ತನ್ನ
ತಾಯಿಗೆ, ''ಅಮ್ಮಾ, ಯಾರೋ ನಿನ್ನ ಇಪ್ಪತ್ತೆಂಟು ತೊಲೆ
ಬೆಳ್ಳಿಯನ್ನು ಕದ್ದಿದ್ದರಲ್ಲಾ, ನಿನಗೆ ನೆನಪಿದೆಯಾ? ನೀನು
ಅದರ ಸಲುವಾಗಿ ಶಾಪಹಾಕುವದನ್ನು ನಾನು ಕೇಳಿದ್ದೆ.
ನಾನು ಅದನ್ನು ತೆಗೆದುಕೊಂಡಿದ್ದೆ. ಇಗೋ ಆ ಬೆಳ್ಳಿ ನನ್ನ
ಹತ್ತಿರ ಇದೆ'' ಎಂದು ಹೇಳಿದನು.

ಅವನ ತಾಯಿಯು ಅವನಿಗೆ, ''ಮಗನೇ,
ಯೆಹೋವನು, ನಿನ್ನನ್ನು ಆಶೀರ್ವದಿಸಲಿ'' ಎಂದು
ಹರಸಿದಳು.

[3]ಮೀಕನು ಇಪ್ಪತ್ತೆಂಟು ತೊಲೆ ಬೆಳ್ಳಿಯನ್ನು ತನ್ನ
ತಾಯಿಗೆ ಕೊಟ್ಟನು. ಆಗ ಅವಳು, ''ನಾನು ಈ ಬೆಳ್ಳಿ
ಯನ್ನು ಯೆಹೋವನಿಗೆ ವಿಶೇಷ ಹರಕೆಯಾಗಿ ಕೊಡು
ವೆನು. ಇದನ್ನು ನಾನು ನನ್ನ ಮಗನಿಗೆ ಕೊಡುವೆನು,
ಅವನು ಅದರಿಂದ ಒಂದು ವಿಗ್ರಹವನ್ನು ಮಾಡಿಸಿ ಅದಕ್ಕೆ
ಬೆಳ್ಳಿಯ ಹೊದಿಕೆಯನ್ನು ಹಾಕಿಸುವನು''ಎಂದು ಹೇಳಿ
ಆ ಬೆಳ್ಳಿಯನ್ನು ಮಗನ ಕೈಯಲ್ಲಿ ಕೊಟ್ಟಳು.

[4]ಆದರೆ ಮೀಕನು ಆ ಬೆಳ್ಳಿಯನ್ನು ತನ್ನ ತಾಯಿಗೆ ಹಿಂದಿ
ರುಗಿಸಿದನು. ಅವಳು ಸುಮಾರು ಐದು ತೊಲೆಯಷ್ಟು
ಬೆಳ್ಳಿಯ ನಾಣ್ಯಗಳನ್ನು ಒಬ್ಬ ಅಕ್ಕಸಾಲಿಗನಿಗೆ ಕೊಟ್ಟಳು.
ಆ ಅಕ್ಕಸಾಲಿಗನು ಅದರಿಂದ ಒಂದು ವಿಗ್ರಹವನ್ನು ಮಾಡಿ
ಅದಕ್ಕೆ ಬೆಳ್ಳಿಯ ಹೊದಿಕೆ ಹಾಕಲು ಉಪಯೋಗಿಸಿದನು.
ಆ ವಿಗ್ರಹವನ್ನು ಮೀಕನ ಮನೆಯಲ್ಲಿ ಇಡಲಾಯಿತು.
[5]ವಿಗ್ರಹಗಳನ್ನು ಪೂಜಿಸುವುದಕ್ಕಾಗಿ ಮೀಕನಿಗೆ ಒಂದು
ಮಂದಿರವಿತ್ತು. ಮೀಕನು ಏಫೋದನ್ನೂ* ವಿಗ್ರಹ
ಗಳನ್ನೂ ಪೂಜಿಸಲು ತನ್ನ ಒಬ್ಬ ಮಗನನ್ನು ಅರ್ಚಕನ
ನ್ನಾಗಿ ನೇಮಿಸಿದನು. [6](ಆ ಕಾಲದಲ್ಲಿ ಇಸ್ರೇಲರಿಗೆ ಅರಸ
ನಿರಲಿಲ್ಲ. ಪ್ರತಿಯೊಬ್ಬರೂ ತಮಗೆ ಸರಿ ತೋರಿದಂತೆ
ನಡೆದುಕೊಳ್ಳುತ್ತಿದ್ದರು.)

[7]ಲೇವಿಯ ಕುಲದ ಒಬ್ಬ ತರುಣನಿದ್ದನು. ಅವನು
ಯೆಹೂದದ ಬೇತ್ಲೆಹೇಮಿನವನಾಗಿದ್ದು ಯೆಹೂದ್ಯರ
ಸಂಗಡ ವಾಸಮಾಡುತ್ತಿದ್ದನು. [8]ಆ ತರುಣನು ಯೆಹೂದ
ಪ್ರದೇಶದ ಬೇತ್ಲೆಹೇಮನ್ನು ಬಿಟ್ಟು ವಾಸಮಾಡಲು ಬೇರೆ
ಸ್ಥಳವನ್ನು ಹುಡುಕುತ್ತಿದ್ದನು. ಅವನು ಪ್ರಯಾಣ
ಮಾಡುತ್ತಾ ಮೀಕನ ಮನೆಗೆ ಬಂದನು. ಮೀಕನ
ಮನೆಯು ಎಫ್ರಾಯೀಮ್ ಬೆಟ್ಟಪ್ರದೇಶದಲ್ಲಿತ್ತು.
[9]ಮೀಕನು ಅವನನ್ನು, ''ನೀನು ಎಲ್ಲಿಂದ ಬಂದಿರುವೆ?''
ಎಂದು ಕೇಳಿದನು. ಆ ತರುಣನು, ''ನಾನು ಯೆಹೂದ
ಪ್ರದೇಶದ ಬೇತ್ಲೆ- ಹೇಮಿನವನಾದ ಲೇವಿಯನು. ನಾನು
ವಾಸಮಾಡುವುದಕ್ಕೆ ಒಂದು ಸ್ಥಳವನ್ನು ಹುಡುಕು
ತ್ತಿದ್ದೇನೆ'' ಎಂದು ಹೇಳಿದನು.

[10]ಆಗ ಮೀಕನು ಅವನಿಗೆ, ''ನಮ್ಮಲ್ಲಿಯೇ ಇರು.
ನಮಗೆ ತಂದೆಯೂ ಯಾಜಕನೂ ಆಗಿರು. ನಾನು ನಿನಗೆ
ಪ್ರತಿವರ್ಷ ನಾಲ್ಕು ಔನ್ಸ್ ಬೆಳ್ಳಿಯನ್ನೂ ಊಟವನ್ನೂ
ವಸ್ತ್ರಗಳನ್ನೂ ಕೊಡುತ್ತೇನೆ'' ಎಂದು ಹೇಳಿದನು.

ಮೀಕನು ಹೇಳಿದಂತೆ ಆ ಲೇವಿಯು ಮಾಡಿದನು. [11]ಆ
ತರುಣ ಲೇವಿಯು ಮೀಕನಲ್ಲಿಯೇ ಇರಲು ಒಪ್ಪಿ
ಕೊಂಡನು. ಆ ತರುಣನು ಮೀಕನ ಒಬ್ಬ ಮಗನಂತೆಯೇ
ಆದನು. [12]ಮೀಕನು ಅವನನ್ನು ತಮಗೆ ಯಾಜಕನಾಗ
ಬೇಕೆಂದು ಕೇಳಿಕೊಂಡನು. ಆದುದರಿಂದ ಆ ತರುಣನು
ಯಾಜಕನಾಗಿ ಮೀಕನ ಮನೆಯಲ್ಲಿಯೇ ವಾಸ

**ಏಫೋದ್** ಇದು ಏನು? ಎಂದು ಸರಿಯಾಗಿ ಗೊತ್ತಿಲ್ಲ. ಇದು ಒಂದು ವಿಶೇಷ ಮೇಲಂಗಿ ಆಗಿರಬಹುದು ಅಥವಾ ಒಂದು ವಿಗ್ರಹವಾಗಿರ ಬಹುದು.

ಮಾಡಿದನು. 13ಮೀಕನು ತನ್ನೊಳಗೆ, ‘‘ಯೆಹೋವನು
ನನಗೆ ಕೃಪೆ ತೋರುವನು. ಏಕೆಂದರೆ ನನ್ನ ಮನೆಯಲ್ಲಿ
ಲೇವಿಕುಲದ ಒಬ್ಬನು ಯಾಜಕನಾಗಿದ್ದಾನೆ’’ ಎಂದು
ಕೊಂಡನು.

## ದಾನ್ಯರು ಲಯಿಷ್ ನಗರವನ್ನು ಸ್ವಾಧೀನಪಡಿಸಿಕೊಂಡರು

18 ಆ ಕಾಲದಲ್ಲಿ ಇಸ್ರೇಲರಿಗೆ ಅರಸನಿರಲಿಲ್ಲ. ಆ
ಸಮಯದಲ್ಲಿ ದಾನ್‌ಕುಲದವರು ಇನ್ನೂ ತಮ್ಮ
ವಾಸಕ್ಕಾಗಿ ಒಂದು ಸ್ಥಳವನ್ನು ಹುಡುಕುತ್ತಿದ್ದರು. ಇನ್ನೂ
ಅವರಿಗೆ ತಮ್ಮದೇ ಆದ ಒಂದು ಪ್ರದೇಶವೂ ಇರಲಿಲ್ಲ.
ಇಸ್ರೇಲಿನ ಬೇರೆ ಕುಲಗಳಿಗೆ ತಮ್ಮದೇ ಆದ ಪ್ರದೇಶ
ಇತ್ತು. ಆದರೆ ದಾನ್ ಕುಲದವರು ಮಾತ್ರ ಇನ್ನೂ ತಮ್ಮ
ಪ್ರದೇಶವನ್ನು ಹೊಂದಿಕೊಂಡಿರಲಿಲ್ಲ.

2ದಾನ್ ಕುಲದವರು ತಮಗೆ ಭೂಮಿಯನ್ನು
ಹುಡುಕುವುದಕ್ಕಾಗಿ ಐದು ಮಂದಿ ಸೈನಿಕರನ್ನು ಕಳುಹಿ
ಸಿದರು. ಅವರು ತಮ್ಮ ವಾಸಕ್ಕಾಗಿ ಒಳ್ಳೆಯ ಸ್ಥಳವನ್ನು
ಹುಡುಕಲು ಹೋದರು. ಆ ಐದು ಮಂದಿ ಚೊರ್ಗಾ
ಮತ್ತು ಎಷ್ಟಾವೋಲ್ ನಗರದವರಾಗಿದ್ದರು. ಅವರು
ದಾನ್ ಕುಲದವರ ಮನೆತನಕ್ಕೆ ಸೇರಿದವರಾದ ಕಾರಣ
‘ಭೂಮಿಯನ್ನು ಹುಡುಕಲು’ ಅವರನ್ನು ಕಳುಹಿ
ಸಲಾಗಿತ್ತು.

ಆ ಐದು ಜನರು ಎಫ್ರಾಯೀಮ್ ಬೆಟ್ಟದ ಸೀಮೆಗೆ
ಬಂದು ಮೀಕನ ಮನೆಯಲ್ಲಿ ಇಳಿದುಕೊಂಡರು. 3ಆ
ಐದು ಜನರು ಮೀಕನ ಮನೆಯ ಸಮೀಪಕ್ಕೆ ಬಂದಾಗ
ತರುಣನಾಗಿದ್ದ ಲೇವಿಯ ಧ್ವನಿಯನ್ನು ಕೇಳಿ ಗುರುತಿ
ಸಿದರು. ಆದುದರಿಂದ ಅವರು ಮೀಕನ ಮನೆಯಲ್ಲಿ
ಇಳಿದುಕೊಂಡು ಆ ತರುಣನಿಗೆ, ‘‘ನಿನ್ನನ್ನು ಇಲ್ಲಿಗೆ
ಯಾರು ಕರೆದುತಂದರು? ನೀನು ಇಲ್ಲಿ ಏನು ಮಾಡು
ತ್ತಿರುವೆ? ಇಲ್ಲಿ ನಿನ್ನ ಉದ್ಯೋಗವೇನು?’’ ಎಂದು
ಕೇಳಿದರು.

4ಮೀಕನು ತನಗಾಗಿ ಮಾಡಿದ ಎಲ್ಲಾ ವ್ಯವಸ್ಥೆಯನ್ನು
ಅವರಿಗೆ ವಿವರಿಸಿ, ‘‘ನಾನು ಮೀಕನ ಯಾಜಕನಾಗಿ ಕೆಲಸ
ಮಾಡುತ್ತಿದ್ದೇನೆ. ಅವನು ನನಗೆ ಸಂಬಳ ಕೊಡುತ್ತಾನೆ’’
ಎಂದು ಹೇಳಿದನು.

5ಅವರು ಅವನಿಗೆ, ‘‘ವಾಸಕ್ಕಾಗಿ ಭೂಮಿಯನ್ನು ಹುಡು
ಕಲು ಕೈಕೊಂಡ ನಮ್ಮ ಪ್ರಯಾಣ ಸಫಲವಾಗುವುದೋ
ಇಲ್ಲವೋ ಎಂಬುದನ್ನು ನಾವು ತಿಳಿದುಕೊಳ್ಳಬೇಕಾಗಿದೆ.
ದಯವಿಟ್ಟು ದೇವರಲ್ಲಿ ಈ ವಿಷಯ ಕೇಳು’’ ಎಂದು
ಕೇಳಿಕೊಂಡರು.

6ಆ ಯಾಜಕನು, ‘‘ಸಮಾಧಾನದಿಂದ ಹೋಗಿರಿ;
ಯೆಹೋವನು ನಿಮಗೆ ಮಾರ್ಗದರ್ಶನ ಮಾಡುತ್ತಾನೆ’’
ಎಂದು ಉತ್ತರಿಸಿದನು.

7ಆ ಐದು ಜನರು ಹೊರಟರು. ಅವರು ಲಯಿಷ್
ನಗರಕ್ಕೆ ಬಂದರು. ಅಲ್ಲಿಯ ಜನರು ಸುರಕ್ಷಿತವಾಗಿರು
ವುದನ್ನು ಅವರು ನೋಡಿದರು. ಚೀದೋನ್ಯರು ಅವರನ್ನು
ಆಳುತ್ತಿದ್ದರು. ಎಲ್ಲವೂ ಶಾಂತವಾಗಿತ್ತು; ಸಮಾಧಾನ
ಕರವಾಗಿತ್ತು; ಸುಖಕರವಾಗಿತ್ತು. ಸಮೀಪದಲ್ಲಿ ಅವರನ್ನು
ಪೀಡಿಸುವ ಶತ್ರುಗಳು ಇರಲಿಲ್ಲ. ಅವರು ಚೀದೋನ್
ನಗರದಿಂದ ಬಹಳ ದೂರ ಇದ್ದರು. ಅವರು ಆರಾಮಿನ
ಜನರೊಡನೆ ಯಾವ ಒಪ್ಪಂದವನ್ನೂ ಇಟ್ಟು
ಕೊಂಡಿರಲಿಲ್ಲ.

8ಆ ಐದು ಜನರು ಚೊರ್ಗಾ, ಎಷ್ಟಾವೋಲ್
ನಗರಗಳಿಗೆ ಹಿಂತಿರುಗಿಹೋದರು. ಅವರ ಬಂಧುಗಳು,
‘‘ನೀವು ಯಾವ ವರ್ತಮಾನ ತಂದಿದ್ದೀರಿ?’’ ಎಂದು
ಕೇಳಿದರು.

9ಈ ಐದು ಜನ, ‘‘ನಾವು ಒಂದು ಪ್ರದೇಶವನ್ನು ಹುಡು
ಕಿದ್ದೇವೆ. ಅದು ಬಹಳ ಚೆನ್ನಾಗಿದೆ. ತಡಮಾಡುವುದು
ಬೇಡ. ಬೇಗ ಹೋಗಿ ಆ ಭೂಮಿಯನ್ನು ತೆಗೆದು
ಕೊಳ್ಳೋಣ. 10ನೀವು ಆ ಸ್ಥಳಕ್ಕೆ ಬಂದಮೇಲೆ ಅಲ್ಲಿ
ಸಾಕಷ್ಟು ಭೂಮಿ ಇದೆ ಎಂಬುದನ್ನು ಅರಿತುಕೊಳ್ಳುತ್ತೀರಿ.
ಅಲ್ಲಿ ಎಲ್ಲವೂ ಸಮೃದ್ಧಿಕರವಾಗಿದೆ. ಅಲ್ಲಿಯ ಜನರಿಗೆ
ಶತ್ರುಗಳು ಧಾಳಿ ಮಾಡಬಹುದೆಂಬ ಭಯವೇ ಇಲ್ಲ.
ಖಂಡಿತವಾಗಿಯೂ ದೇವರು ಆ ಭೂಮಿಯನ್ನು ನಮಗೆ
ಕೊಟ್ಟಿದ್ದಾನೆ’’ ಎಂದು ಉತ್ತರಿಸಿದರು.

11ದಾನ್‌ಕುಲದವರ ಆರುನೂರು ಜನರು ಚೊರ್ಗಾ
ಮತ್ತು ಎಷ್ಟಾವೋಲ್ ನಗರಗಳಿಂದ ಹೊರಟರು.
ಅವರು ಯುದ್ಧಸನ್ನದ್ಧರಾಗಿದ್ದರು. 12ಲಯಿಷ್ ನಗರಕ್ಕೆ
ಹೋಗುವ ಮಾರ್ಗದಲ್ಲಿ ಅವರು ಯೆಹೂದದ ಕಿರ್ಯ
ತ್ಯಾರೀಮಿನ ಬಳಿಯಲ್ಲಿ ನಿಂತುಕೊಂಡರು. ಅವರು ಅಲ್ಲಿ
ಒಂದು ಪಾಳೆಯ ಮಾಡಿಕೊಂಡರು. ಆದುದರಿಂದ ಆ
ಸ್ಥಳಕ್ಕೆ ಇಂದಿನವರೆಗೂ ‘ದಾನ್ಯರ ಪಾಳೆಯ’ ಎಂಬ
ಹೆಸರಿದೆ. 13ಅಲ್ಲಿಂದ ಆ ಆರುನೂರು ಮಂದಿ ಎಫ್ರಾ
ಯೀಮಿನ ಬೆಟ್ಟಪ್ರದೇಶಕ್ಕೆ ಪ್ರಯಾಣಮಾಡಿ ಮೀಕನ
ಮನೆಗೆ ಬಂದರು.

14ಆಗ ಲಯಿಷ್ ದೇಶವನ್ನು ಸಂಚರಿಸಿ ನೋಡಲು
ಹೋಗಿದ್ದ ಐದು ಜನರು ತಮ್ಮ ಬಂಧುಗಳಿಗೆ, ‘‘ಇಲ್ಲಿಯ
ಒಂದು ಮನೆಯಲ್ಲಿ ಏಫೋದ್ ಇದೆ; ಮನೆದೇವರು
ಗಳೂ ಇವೆ. ಕೆತ್ತಿಮಾಡಿರುವ ಒಂದು ವಿಗ್ರಹವೂ ಇದೆ.
ಈಗ ನೀವು ಹೋಗಿ ಅವುಗಳನ್ನು ತೆಗೆದುಕೊಂಡು
ಬನ್ನಿರಿ’’ ಎಂದು ಹೇಳಿದರು. 15ಅವರು ಯೌವನಸ್ಥನಾದ
ಲೇವಿಯು ಇದ್ದ ಮೀಕನ ಮನೆಗೆ ಬಂದು ಇಳಿದು
ಕೊಂಡರು. ತರುಣನ ಯೋಗಕ್ಷೇಮವನ್ನು ಕೇಳಿದರು.
16ದಾನ್ಯರ ಆರುನೂರು ಜನರು ಪುರದ್ವಾರದಲ್ಲಿ
ನಿಂತಿದ್ದರು. ಅವರು ಆಯುಧಗಳನ್ನು ಹಿಡಿದುಕೊಂಡು
ಯುದ್ಧ ಸನ್ನದ್ಧರಾಗಿದ್ದರು. 17-18ಆ ಐದು ಜನ

ಗೂಢಚಾರರು ಮನೆಯೊಳಗೆ ಪ್ರವೇಶ ಮಾಡಿದರು. ಯಾಜಕನು ಹೊರಗೆ ಬಾಗಿಲ ಬಳಿಯಲ್ಲಿ ಯುದ್ಧ ಸನ್ನದ್ಧರಾದ ಆರುನೂರು ಜನರ ಸಂಗಡ ನಿಂತಿದ್ದನು. ಆಗ ಆ ಐದು ಮಂದಿ ಮನೆಯೊಳಗೆ ಹೋಗಿ ಕೆತ್ತನೆಯ ವಿಗ್ರಹವನ್ನೂ ಏಫೋದನ್ನೂ ಬೆಳ್ಳಿವಿಗ್ರಹಗಳನ್ನೂ ಗೃಹ ದೇವತೆಗಳ ವಿಗ್ರಹಗಳನ್ನೂ ತೆಗೆದುಕೊಂಡರು. ಅವರನ್ನು ಕಂಡ ತರುಣ ಲೇವಿಯು, ''ನೀವು ಏನು ಮಾಡುತ್ತಿದ್ದೀರಿ?'' ಎಂದು ಕೇಳಿದನು.

[19]ಆ ಐದು ಜನರು, ''ಸುಮ್ಮನಿರು, ಶಬ್ದ ಮಾಡಬೇಡ. ನಮ್ಮ ಸಂಗಡ ಬಾ. ನಮಗೆ ತಂದೆಯೂ ಯಾಜಕನೂ ಆಗಿರು. ನೀನು ಕೇವಲ ಒಬ್ಬ ಮನುಷ್ಯನ ಯಾಜಕ ನಾಗಿರುವುದು ಒಳ್ಳೆಯದೋ ಅಥವಾ ಇಸ್ರೇಲರ ಒಂದು ಕುಲದ ಯಾಜಕನಾಗಿರುವುದು ಒಳ್ಳೆಯದೋ ಎಂಬು ದನ್ನು ನೀನೇ ವಿಚಾರಮಾಡು'' ಎಂದು ಉತ್ತರಿಸಿದರು.

[20]ಇದರಿಂದ ಲೇವಿಯನಿಗೆ ಸಂತೋಷವಾಯಿತು. ಅವನು ಏಫೋದನ್ನೂ ಗೃಹದೇವತೆಗಳನ್ನೂ ಕೆತ್ತನೆಯ ಕೆಲಸದ ವಿಗ್ರಹವನ್ನೂ ತೆಗೆದುಕೊಂಡು ದಾನ್ಯರ ಜೊತೆಗೆ ಹೋದನು.

[21]ಆಗ ದಾನ್ಯರ ಆರುನೂರು ಜನರು ಲೇವಿಯ ಯಾಜ ಕನೊಂದಿಗೆ ಮೀಕನ ಮನೆಯನ್ನು ಬಿಟ್ಟುಹೊರಟರು. ಅವರು ತಮ್ಮ ಹೆಂಡತಿಮಕ್ಕಳನ್ನೂ ತಮ್ಮ ದನಕರು ಗಳನ್ನೂ ಎಲ್ಲಾ ವಸ್ತುಗಳನ್ನೂ ಮುಂದೆ ಕಳುಹಿಸಿದರು.

[22]ಆ ಸ್ಥಳದಿಂದ ದಾನ್ಯರು ಬಹುದೂರ ಹೋದರು. ಮೀಕನ ನೆರೆಹೊರೆಯವರೆಲ್ಲ ಒಂದೆಡೆ ಸೇರಿದರು. [23]ಅವರು ದಾನ್ಯರನ್ನು ಬೆನ್ನಟ್ಟಿಕೊಂಡು ಅವರ ಸಮೀಪಕ್ಕೆ ಹೋಗಿ ಅವರನ್ನು ಕೂಗಿದರು. ದಾನ್ಯರು ಹಿಂತಿರುಗಿ ನೋಡಿ ಮೀಕನಿಗೆ, ''ನಿನಗೇನಾಗಿದೆ? ಏಕೆ ಕೂಗಿ ಕೊಳ್ಳುತ್ತಿರುವೆ?'' ಎಂದು ಕೇಳಿದರು.

[24]ಮೀಕನು, ''ದಾನ್ಯರಾದ ನೀವು ನನ್ನ ವಿಗ್ರಹಗಳನ್ನು ತೆಗೆದುಕೊಂಡಿದ್ದೀರಿ. ಆ ವಿಗ್ರಹಗಳನ್ನು ನಾನು ನನ ಗೋಸ್ಕರ ಮಾಡಿಸಿದ್ದೆ. ನೀವು ನನ್ನ ಯಾಜಕನನ್ನು ಸಹ ತೆಗೆದುಕೊಂಡಿದ್ದೀರಿ. ನನ್ನ ಹತ್ತಿರ ಈಗ ಏನು ಉಳಿದಿದೆ? ಹೀಗೆಲ್ಲ ಮಾಡಿ ನೀವು ನನಗೆ, 'ನಿನಗೇನಾಗಿದೆ?' ಎಂದು ಕೇಳಬಹುದೇ?''ಎಂದು ಉತ್ತರಕೊಟ್ಟನು. [25]ಅದಕ್ಕೆ ದಾನ್ಯರು, ''ನೀನು ನಮ್ಮ ಜೊತೆವಾದ ವಿವಾದ ಮಾಡದಿ ರುವುದೇ ಒಳ್ಳೆಯದು. ನಮ್ಮಲ್ಲಿ ಬಹಳ ಸಿಟ್ಟಿನ ಕೆಲವರಿ ದ್ದಾರೆ. ನೀನು ಹೀಗೆ ಕೂಗಾಡಿದರೆ ಅವರು ನಿಮ್ಮ ಮೇಲೆ ದಾಳಿ ಮಾಡಬಹುದು. ಆಗ ನೀನು ಮತ್ತು ನಿನ್ನ ಕುಟುಂಬದವರು ಸತ್ತುಹೋಗುವಿರಿ'' ಎಂದು ಪ್ರತ್ಯುತ್ತರ ಕೊಟ್ಟರು. [26]ಆಮೇಲೆ ದಾನ್ಯರು ಮತ್ತೆ ತಮ್ಮ ಪ್ರಯಾಣ ವನ್ನು ಮುಂದುವರಿಸಿದರು. ಅವರು ತುಂಬ ಬಲಿಷ್ಠ ರೆಂದೂ ತನ್ನಿಂದ ಏನೂ ಮಾಡಲು ಸಾಧ್ಯವಿಲ್ಲವೆಂದೂ ಮೀಕನು ತಿಳಿದುಕೊಂಡು ಹಿಂದಿರುಗಿದನು.

[27]ಮೀಕನು ಮಾಡಿಸಿದ ವಿಗ್ರಹಗಳನ್ನು ದಾನ್ಯರು ತೆಗೆದುಕೊಂಡರು. ಅವರು ಮೀಕನ ಜೊತೆಗಿದ್ದ ಯಾಜಕ ನನ್ನು ಸಹ ತೆಗೆದುಕೊಂಡು ಹೋದರು. ಅವರು ಲಯಿಷಿಗೆ ಬಂದು ಅಲ್ಲಿನ ಜನರ ಮೇಲೆ ದಾಳಿ ಮಾಡಿದರು. ಆ ಜನರು ಶಾಂತಿಯಿಂದ ಇದ್ದರು. ಅವರು ದಾಳಿಯನ್ನು ನಿರೀಕ್ಷಿಸಿರಲಿಲ್ಲ. ದಾನ್ಯರು ತಮ್ಮ ಖಡ್ಗ ಗಳಿಂದ ಆ ಜನರನ್ನು ಕೊಂದುಹಾಕಿದರು. ಆಮೇಲೆ ಆ ನಗರವನ್ನು ಸುಟ್ಟುಬಿಟ್ಟರು. [28]ಲಯಿಷಿನಲ್ಲಿ ವಾಸ ಮಾಡುತ್ತಿದ್ದ ಜನರನ್ನು ರಕ್ಷಿಸುವವರು ಯಾರೂ ಇರ ಲಿಲ್ಲ. ಅವರು ಚೀದೋನ್ ನಗರದಿಂದ ಬಹು ದೂರದಲ್ಲಿದ್ದ ಕಾರಣ ಅವರೂ ಬರುವಂತಿರಲಿಲ್ಲ. ಲಯಿಷಿನವರು ಆರಾಮಿನ ಜನರೊಂದಿಗೆ ಯಾವ ಒಪ್ಪಂದವನ್ನೂ ಮಾಡಿಕೊಂಡಿರಲಿಲ್ಲ. ಹೀಗಾಗಿ ಅವರೂ ಸಹಾಯಕ್ಕೆ ಬರಲಿಲ್ಲ. ಬೇತ್‌ರೆಹೋಬಿನ ಕಣಿವೆ ಯಲ್ಲಿದ್ದ ಈ ನಗರವನ್ನು ದಾನ್ಯರು ಹೊಸದಾಗಿ ಕಟ್ಟಿದರು. ಆ ನಗರವು ಅವರ ವಾಸಸ್ಥಾನವಾಯಿತು. [29]ದಾನ್ಯರು ಆ ನಗರಕ್ಕೆ ಒಂದು ಹೊಸ ಹೆಸರನ್ನು ಕೊಟ್ಟರು. ಹಿಂದೆ ಅದರ ಹೆಸರು ಲಯಿಷ್ ಎಂದಿತ್ತು. ಆದರೆ ಅವರು ಅದಕ್ಕೆ ದಾನ್ ಎಂದು ಹೆಸರಿಟ್ಟರು. ಅವರು ತಮ್ಮ ಪೂರ್ವಿಕನಾದ ದಾನನ ಸ್ಮರಣಾರ್ಥವಾಗಿ ಆ ಹೆಸರನ್ನಿಟ್ಟರು. ದಾನನು ಇಸ್ರೇಲನ ಮಕ್ಕಳಲ್ಲಿ ಒಬ್ಬನು.

[30]ದಾನ್ಯರು ದಾನ್ ನಗರದಲ್ಲಿ ಆ ವಿಗ್ರಹಗಳನ್ನು ಪ್ರತಿಷ್ಠಾಪಿಸಿದರು. ಅವರು ಗೇರ್ಷೋಮನ ಮಗನಾದ ಯೆಹೋನಾತಾನನನ್ನು ತಮ್ಮ ಯಾಜಕನನ್ನಾಗಿ ಮಾಡಿ ಕೊಂಡರು. ಗೇರ್ಷೋಮನು ಮೋಶೆಯ* ಮಗನಾಗಿ ದ್ದನು. ಇಸ್ರೇಲರನ್ನು ಸೆರೆಹಿಡಿದು ಬಾಬಿಲೋನಿಗೆ ತೆಗೆದುಕೊಂಡು ಹೋಗುವವರೆಗೆ ಯೆಹೋನಾತಾನನು ಮತ್ತು ಅವನ ಮಕ್ಕಳು ದಾನ್ಯರ ಯಾಜಕರಾಗಿದ್ದರು. [31]ಮೀಕನು ಮಾಡಿದ್ದ ಆ ವಿಗ್ರಹಗಳನ್ನು ದಾನ್ಯರು ಪೂಜಿಸಿದರು. ಶೀಲೋವಿನಲ್ಲಿ ದೇವಸ್ಥಾನವಿದ್ದ ಕಾಲ ದಲ್ಲೆಲ್ಲಾ ಅವರು ಆ ವಿಗ್ರಹಗಳನ್ನು ಪೂಜಿಸಿದರು.

### ಒಬ್ಬ ಲೇವಿ ಮತ್ತು ಅವನ ದಾಸಿ

19 ಆಗಿನ ಕಾಲದಲ್ಲಿ ಇಸ್ರೇಲರಿಗೆ ಅರಸನಿರಲಿಲ್ಲ. ಎಫ್ರಾಯೀಮ್ ಬೆಟ್ಟಪ್ರದೇಶದ ಒಂದು ಮೂಲೆಯಲ್ಲಿ ಒಬ್ಬ ಲೇವಿಯು ವಾಸಮಾಡುತ್ತಿದ್ದನು. ಆ ಮನುಷ್ಯನಿಗೆ ಒಬ್ಬ ದಾಸಿ ಇದ್ದಳು. ಅವಳು ಯೆಹೂದದ ಬೇತ್ಲೆಹೇಮಿನವಳಾಗಿದ್ದಳು. [2]ಒಮ್ಮೆ ಅವಳಿಗೂ ಆ ಲೇವಿಗೂ ಜಗಳವಾಯಿತು. ಅವಳು ಅವನನ್ನು ಬಿಟ್ಟು ಯೆಹೂದದ ಬೇತ್ಲೆಹೇಮಿನಲ್ಲಿದ್ದ ತನ್ನ ತಂದೆಯ ಮನೆಗೆ

---

**ಮೋಶೆ** ಅಥವಾ ''ಮನಸ್ಸೆ.''

ಹೋದಳು. ಅವಳು ಅಲ್ಲಿ ನಾಲ್ಕು ತಿಂಗಳು ಇದ್ದುಬಿಟ್ಟಳು.
3ಆಗ ಆಕೆಯ ಗಂಡನು ಅವಳ ಬಳಿಗೆ ಹೋದನು; ಅವ
ಳೊಂದಿಗೆ ಪ್ರೀತಿಯಿಂದ ಮಾತನಾಡಿ ಅವಳನ್ನು ಕರೆದು
ಕೊಂಡು ಬರಬೇಕೆಂಬುದು ಅವನ ಆಲೋಚನೆ
ಯಾಗಿತ್ತು. ಆದ್ದರಿಂದ ಅವನು ತನ್ನ ಸೇವಕನೊಡನೆ
ಎರಡು ಕತ್ತೆಗಳನ್ನೂ ತೆಗೆದುಕೊಂಡು ಹೋದನು. ಆ
ಲೇವಿಯನು ಆಕೆಯ ತಂದೆಯ ಮನೆಗೆ ಬಂದನು. ಅವಳ
ತಂದೆಯು ಆ ಲೇವಿಯನನ್ನು ನೋಡಿ ಅವನನ್ನು ಸ್ವಾಗತಿ
ಸಲು ಮನೆಯ ಹೊರಗೆ ಬಂದನು. ಅವಳ ತಂದೆಗೆ ಬಹಳ
ಸಂತೋಷವಾಯಿತು. 4ಅವಳ ತಂದೆಯು ಆ ಲೇವಿ
ಯನನ್ನು ತನ್ನ ಮನೆಯೊಳಗೆ ಕರೆದುಕೊಂಡು ಹೋಗಿ,
ಅಲ್ಲೇ ಇರುವಂತೆ ಕೇಳಿಕೊಂಡನು. ಆದುದರಿಂದ ಆ
ಲೇವಿಯು ಅಲ್ಲಿ ಮೂರು ದಿನ ಇದ್ದನು. ಅವನು ಅನ್ನ
ಪಾನ ಮಾಡಿ ಮಾವನ ಮನೆಯಲ್ಲಿ ಮಲಗುತ್ತಿದ್ದನು.

5ನಾಲ್ಕನೆಯ ದಿನ ಅವರು ಬೆಳಗಿನ ಜಾವ ಬೇಗ
ಎದ್ದರು. ಆ ಲೇವಿಯು ಹೊರಡುವದಕ್ಕೆ ಸಿದ್ಧನಾಗು
ತ್ತಿದ್ದನು. ಆದರೆ ಮಾವನು ತನ್ನ ಅಳಿಯನಿಗೆ, ''ಸ್ವಲ್ಪ
ಊಟಮಾಡು; ಆಮೇಲೆ ಹೋಗುವಿಯಂತೆ'' ಎಂದನು.
6ಆದುದರಿಂದ ಆ ಲೇವಿಯು ಮತ್ತು ಅವನ ಮಾವನು
ಒಟ್ಟಿಗೆ ಅನ್ನಪಾನಗಳನ್ನು ತೆಗೆದುಕೊಂಡರು. ಬಳಿಕ ಆ
ಸ್ತ್ರೀಯ ತಂದೆಯು, ''ದಯವಿಟ್ಟು ಈ ರಾತ್ರಿ ಇದ್ದುಬಿಡು.
ವಿಶ್ರಮಿಸಿಕೋ, ಸಂತೋಷಪಡು. ಈ ರಾತ್ರಿ ಇಲ್ಲೇ ಇರು,
ಆಮೇಲೆ ಹೋಗುವಿಯಂತೆ'' ಎಂದನು. 7ಆದರೂ ಆ
ಲೇವಿಯು ಹೊರಡುವುದಕ್ಕೆ ಎದ್ದನು. ಆದರೆ ಅವನ
ಮಾವನು ಆ ರಾತ್ರಿಯೂ ಅಲ್ಲಿಯೇ ಇರುವಂತೆ
ಒತ್ತಾಯಮಾಡಿದನು.

8ಐದನೆಯ ದಿನ ಆ ಲೇವಿಯು ಬೆಳಗಿನ ಜಾವ ಬೇಗ
ಎದ್ದು ಹೊರಡಲು ಸಿದ್ಧನಾಗಿದ್ದನು. ಆದರೆ ಆ ಸ್ತ್ರೀಯ
ತಂದೆಯು ತನ್ನ ಅಳಿಯನಿಗೆ, ''ಮೊದಲು ಊಟಮಾಡು;
ವಿಶ್ರಾಂತಿ ತೆಗೆದುಕೋ. ಈ ರಾತ್ರಿ ಇಲ್ಲಿಯೇ ಇರು''
ಎಂದು ಕೇಳಿಕೊಂಡನು. ಅವರಿಬ್ಬರು ಮತ್ತೆ ಊಟ
ಮಾಡಿದರು.

9ಆಮೇಲೆ ಆ ಲೇವಿಯು ಅವನ ಉಪಪತ್ನಿಯೂ
ಅವನ ಆಳೂ ಹೊರಡಲು ಎದ್ದರು. ಆದರೆ ಆ ಸ್ತ್ರೀಯ
ತಂದೆಯು, ''ಈಗ ಕತ್ತಲಾಗುತ್ತಾ ಬಂತು, ಹೊತ್ತು
ಮುಳುಗುವುದರಲ್ಲಿದೆ. ಈ ರಾತ್ರಿ ಇಲ್ಲಿಯೇ ಸಂತೋಷ
ದಿಂದ ಕಾಲ ಕಳೆಯಿರಿ. ನಾಳೆ ಬೆಳಿಗ್ಗೆ ನೀವು ಬೇಗನೆ ಎದ್ದು
ಪ್ರಯಾಣಮಾಡಬಹುದು'' ಎಂದನು.

10ಆದರೆ ಆ ಲೇವಿಯು ಇನ್ನೊಂದು ರಾತ್ರಿ ಅಲ್ಲಿ
ಇರಲು ಇಷ್ಟಪಡಲಿಲ್ಲ. ಅವನು ತನ್ನ ಎರಡು ಕತ್ತೆಗಳನ್ನು
ತೆಗೆದುಕೊಂಡು ಮತ್ತು ತನ್ನ ದಾಸಿಯನ್ನು ಕರೆದು
ಕೊಂಡು ಹೊರಟನು. ಅವನು ಯೆಬೂಸ ನಗರದವರೆಗೆ
ಪ್ರಯಾಣ ಮಾಡಿದನು. (ಜೆರುಸಲೇಮಿನ ಇನ್ನೊಂದು
ಹೆಸರು ಯೆಬೂಸ.) 11ಹೊತ್ತು ಮುಳುಗುವುದರಲ್ಲಿತ್ತು.
ಅವರು ಯೆಬೂಸ ನಗರದ ಹತ್ತಿರ ಬಂದಿದ್ದರು. ಆಗ
ಅವನ ಸೇವಕನು ತನ್ನ ಒಡೆಯನಾದ ಆ ಲೇವಿಯನಿಗೆ,
''ಈ ಯೆಬೂಸಿಯರ ನಗರದಲ್ಲಿ ಇದ್ದುಬಿಡೋಣ, ಈ
ರಾತ್ರಿ ಇಲ್ಲಿಯೇ ಕಳೆಯೋಣ'' ಎಂದನು.

12ಆದರೆ ಆ ಲೇವಿಯು, ''ಬೇಡ, ನಾವು ಪರಿಚಯ
ವಿಲ್ಲದವರ ನಗರದಲ್ಲಿ ಇರುವುದು ಬೇಡ. ಆ ಜನರು
ಇಸ್ರೇಲರಲ್ಲ. ನಾವು ಗಿಬೆಯ ನಗರಕ್ಕೆ ಹೋಗೋಣ''
ಎಂದನು. 13ಆ ಲೇವಿಯು ಮತ್ತೆ ತನ್ನ ಸೇವಕನಿಗೆ, ''ಬಾ
ಹೋಗೋಣ, ಗಿಬೆಯದಲ್ಲಾಗಲಿ ಅಥವಾ ರಾಮ
ದಲ್ಲಾಗಲಿ ಈ ರಾತ್ರಿ ಇಳಿದುಕೊಳ್ಳುವ ಪ್ರಯತ್ನ
ಮಾಡೋಣ'' ಎಂದು ಹೇಳಿದನು.

14ಆ ಲೇವಿಯು ಮತ್ತು ಅವನ ಸಂಗಡ ಇದ್ದ ಜನರು
ಪ್ರಯಾಣ ಮುಂದುವರಿಸಿದರು. ಅವರು ಗಿಬೆಯ ನಗರ
ವನ್ನು ಪ್ರವೇಶ ಮಾಡಿದ ಸಮಯದಲ್ಲಿ ಸೂರ್ಯನು
ಮುಳುಗುತ್ತಿದ್ದನು. ಗಿಬೆಯ ನಗರವು ಬೆನ್ಯಾಮೀನ್ಯರ
ಪ್ರದೇಶದಲ್ಲಿದೆ. 15ಅವರು ಗಿಬೆಯದಲ್ಲಿ ತಮ್ಮ ಪ್ರಯಾಣ
ವನ್ನು ನಿಲ್ಲಿಸಿದರು. ಅಂದು ರಾತ್ರಿ ಆ ನಗರದಲ್ಲಿ
ಇರುವುದಕ್ಕೆ ನಿರ್ಧಾರ ಮಾಡಿದರು. ಅವರು ನಗರದ
ಬೀದಿಯ ಮುಖ್ಯಸ್ಥಳಕ್ಕೆ ಬಂದು ಅಲ್ಲಿ ಕುಳಿತುಕೊಂಡರು.
ಯಾರೂ ಅವರನ್ನು ಆ ರಾತ್ರಿ ತಮ್ಮ ಮನೆಯಲ್ಲಿ ಇರಲು
ಕರೆಯಲಿಲ್ಲ.

16ಆ ಸಾಯಂಕಾಲ ಒಬ್ಬ ವೃದ್ಧನು ಹೊಲದಿಂದ ಮನೆಗೆ
ಬರುತ್ತಿದ್ದನು. ಅವನು ಎಫ್ರಾಯೀಮ್ ಬೆಟ್ಟಪ್ರದೇಶ
ದವನಾಗಿದ್ದು, ಈಗ ಗಿಬೆ ನಗರದಲ್ಲಿ ವಾಸಮಾಡು
ತ್ತಿದ್ದನು. (ಗಿಬೆಯ ನಿವಾಸಿಗಳು ಬೆನ್ಯಾಮೀನ್ಯ
ರಾಗಿದ್ದರು.) 17ಆ ವೃದ್ಧನು ಬೀದಿಯ ಮುಖ್ಯಸ್ಥಳದಲ್ಲಿ
ಪ್ರಯಾಣಿಕನನ್ನು (ಲೇವಿಯನ್ನು) ನೋಡಿದನು. ಆ
ವೃದ್ಧನು, ''ನೀನು ಎಲ್ಲಿಗೆ ಹೋಗಬೇಕು? ಎಲ್ಲಿಂದ
ಬಂದಿರುವೆ?'' ಎಂದು ಅವನನ್ನು ಕೇಳಿದನು.

18ಅದಕ್ಕೆ ಲೇವಿಯು, ''ನಾವು ಯೆಹೂದದ
ಬೇತ್ಲೆಹೇಮಿನಿಂದ ಹೊರಟಿದ್ದೇವೆ. ಎಫ್ರಾಯೀಮ್
ಬೆಟ್ಟಪ್ರದೇಶದ ಒಂದು ಮೂಲೆಯಲ್ಲಿರುವ ನಮ್ಮ
ಮನೆಗೆ ಹೋಗುತ್ತಿದ್ದೇವೆ. ಆದರೆ ಈ ರಾತ್ರಿ ಇಲ್ಲಿ ತಂಗಲು
ಯಾರೂ ನಮ್ಮನ್ನು ತಮ್ಮ ಮನೆಗೆ ಆಹ್ವಾನಿಸಲಿಲ್ಲ. ನಾನು
ಯೆಹೂದದ ಬೇತ್ಲೆಹೇಮಿಗೆ ಹೋಗಿದ್ದೆ. ಈಗ ನಾನು
ನಮ್ಮ ಮನೆಗೆ ಹೋಗುತ್ತಿದ್ದೇನೆ. 19ನಮ್ಮ ಕತ್ತೆಗಳಿಗೆ
ಮೇವು ಮತ್ತು ಹುಲ್ಲು ಇವೆ. ನನಗೂ ಈ ಸ್ತ್ರೀಗೂ ನನ್ನ
ಸೇವಕನಿಗೂ ರೊಟ್ಟಿ ಮತ್ತು ದ್ರಾಕ್ಷಾರಸ ಇವೆ. ನಮಗೆ
ಏನೂ ಬೇಕಾಗಿಲ್ಲ'' ಎಂದು ಉತ್ತರಕೊಟ್ಟನು.

20ಅದಕ್ಕೆ ಆ ವೃದ್ಧನು, ''ನೀನು ನನ್ನ ಮನೆಗೆ ಬಂದು
ಈ ರಾತ್ರಿ ಇಳಿದುಕೋ. ನಿನಗೆ ಬೇಕಾದುದನ್ನು ನಾನು
ಕೊಡುವೆ. ನೀನು ಬೀದಿಯಲ್ಲಿ ಮಾತ್ರ ಇರಬೇಡ''

ಎಂದು ಹೇಳಿದನು; [21]ಬಳಿಕ ಆ ವೃದ್ಧನು ಆ ಲೇವಿ
ಯನನ್ನು ಮತ್ತು ಅವನ ಸಂಗಡ ಇದ್ದ ಜನರನ್ನು ತನ್ನ
ಮನೆಗೆ ಕರೆದುಕೊಂಡು ಹೋದನು; ಅವರ ಕತ್ತೆಗಳಿಗೆ
ಮೇವು ಹಾಕಿದನು. ಅವರು ತಮ್ಮ ಕೈಕಾಲುಗಳನ್ನು
ತೊಳೆದುಕೊಂಡರು. ಆಮೇಲೆ ಅವರು ಅನ್ನಪಾನಗಳನ್ನು
ತೆಗೆದುಕೊಂಡರು.

[22]ಲೇವಿಯು, ಮತ್ತು ಅವನ ಸಂಗಡಿಗರು ಸಂತೋಷ
ದಿಂದ ಅಲ್ಲಿದ್ದಾಗ ಆ ನಗರದ ಕೆಲವು ಜನರು ಆ ಮನೆಗೆ
ಮುತ್ತಿಗೆ ಹಾಕಿದರು. ಅವರು ಮಹಾನೀಚ ಜನ
ರಾಗಿದ್ದರು. ಅವರು ಬಾಗಿಲು ತಟ್ಟ ತೊಡಗಿದರು. ಆ
ಮನೆಯ ಯಜಮಾನನಾದ ವೃದ್ಧನಿಗೆ, ''ನಿನ್ನ ಮನೆಗೆ
ಬಂದ ಆ ಮನುಷ್ಯನನ್ನು ಹೊರಗೆ ಕರೆದುಕೊಂಡು ಬಾ.
ನಾವು ಅವನೊಂದಿಗೆ ಸಂಭೋಗ ಮಾಡಬೇಕು'' ಎಂದು
ಕೂಗಾಡಿದರು.

[23]ಆ ವೃದ್ಧನು ಮನೆಯಿಂದ ಹೊರಗೆ ಬಂದು ಆ ನೀಚರ
ಜೊತೆ ಮಾತನಾಡಿ, ''ಬೇಡ, ನನ್ನ ಮಿತ್ರರೇ, ಅಂಥ
ಪಾಪದ ಕೆಲಸವನ್ನು ಮಾಡಬೇಡಿ. ಆ ಮನುಷ್ಯ ನನ್ನ
ಅತಿಥಿಯಾಗಿದ್ದಾನೆ. ಈ ಭಯಂಕರ ಪಾಪವನ್ನು ಮಾಡ
ಬೇಡಿ. [24]ಇಲ್ಲಿ ನೋಡಿರಿ, ನನ್ನ ಮಗಳಿದ್ದಾಳೆ. ಅವಳು
ಯಾರೊಂದಿಗೂ ಈವರೆಗೆ ಸಂಭೋಗಮಾಡಿಲ್ಲ. ನಾನು
ಅವಳನ್ನೂ ಅವನ ದಾಸಿಯನ್ನೂ ಹೊರಗೆ ಕರೆದು
ಕೊಂಡು ಬರುತ್ತೇನೆ. ನಿಮ್ಮ ಮನಸ್ಸಿಗೆ ಬಂದಂತೆ
ಅವರನ್ನು ಬಳಸಿಕೊಳ್ಳಿ. ನೀವು ಅವರನ್ನು ಹಿಂಸಿಸಿದರೂ
ಆ ಮನುಷ್ಯನ ವಿರೋಧವಾಗಿ ಅಂಥ ಭಯಂಕರ ಪಾಪ
ವನ್ನು ಮಾಡಬೇಡಿ'' ಎಂದು ಅವರನ್ನು ಬೇಡಿಕೊಂಡನು.

[25]ಆದರೆ ಆ ನೀಚರು ಆ ವೃದ್ಧನ ಮಾತನ್ನು ಕಿವಿಗೆ
ಹಾಕಿಕೊಳ್ಳಲಿಲ್ಲ. ಆಗ ಆ ಲೇವಿಯು ತನ್ನ ದಾಸಿಯನ್ನು
ಹೊರಗೆ ಕರೆದುಕೊಂಡು ಹೋಗಿ ಆ ನೀಚರಿಗೆ ಒಪ್ಪಿಸಿ
ದನು. ಆ ನೀಚರು ಅವಳನ್ನು ಪೀಡಿಸಿ ಇಡೀ ರಾತ್ರಿ ಅವ
ಳನ್ನು ಸಂಭೋಗಿಸಿದರು. ಬೆಳಗಿನ ಜಾವ ಅವಳನ್ನು
ಹೋಗಲು ಬಿಟ್ಟರು. [26]ಬೆಳಗಿನ ಜಾವ ಅವಳು ತನ್ನ
ಒಡೆಯನಿದ್ದ ಮನೆಗೆ ಬಂದಳು. ಅವಳು ಮನೆಯ ಮುಖ್ಯ
ದ್ವಾರದಲ್ಲಿ ಬಿದ್ದುಬಿಟ್ಟಳು. ಬೆಳಗಾಗುವವರೆಗೂ ಅವಳು
ಅಲ್ಲಿಯೇ ಬಿದ್ದಿದ್ದಳು.

[27]ಆ ಲೇವಿಯನು ಮರುದಿನ ಬೆಳಿಗ್ಗೆ ಬೇಗ ಎದ್ದನು.
ಅವನು ತನ್ನ ಮನೆಗೆ ಹೋಗಬೇಕೆಂದಿದ್ದನು. ಆದ್ದರಿಂದ
ಹೊರಗೆ ಹೋಗಲು ಬಾಗಿಲು ತೆರೆದನು. ಬಾಗಿಲ
ಮುಂದೆ ಹೊಸ್ತಿಲದ ಮೇಲೆ ಕೈಚಾಚಿ ಬಿದ್ದಿದ್ದ ತನ್ನ
ಉಪಪತ್ನಿಯನ್ನು ಕಂಡನು. [28]ಆಗ ಲೇವಿಯು ಅವಳಿಗೆ,
''ಏಳು, ಹೋಗೋಣ'' ಎಂದು ಎಬ್ಬಿಸಿದನು. ಆದರೆ
ಅವಳು ಉತ್ತರ ಕೊಡಲಿಲ್ಲ. ಅವಳು ಸತ್ತುಹೋಗಿದ್ದಳು.

ಆ ಲೇವಿಯು, ಅವಳನ್ನು ತನ್ನ ಕತ್ತೆಯ ಮೇಲೆ ಹೇರಿ
ಕೊಂಡು ಮನೆಗೆ ಹೋದನು. [29]ಅವನು ಮನೆಗೆ ಬಂದ
ಮೇಲೆ ಒಂದು ಕತ್ತಿಯನ್ನು ತೆಗೆದುಕೊಂಡು ತನ್ನ ಉಪ
ಪತ್ನಿಯನ್ನು ಹನ್ನೆರಡು ಹೋಳಾಗಿ ಕತ್ತರಿಸಿದನು.
ಆಮೇಲೆ ಅವನು ಆ ಸ್ತ್ರೀಯ ದೇಹದ ಹನ್ನೆರಡು
ಹೋಳುಗಳನ್ನು ಇಸ್ರೇಲರು ವಾಸ ಮಾಡುವ ಎಲ್ಲ
ಪ್ರದೇಶಗಳಿಗೆ ಕಳುಹಿಸಿಕೊಟ್ಟನು. [30]ಇದನ್ನು ನೋಡಿದ
ಪ್ರತಿಯೊಬ್ಬರು, ''ಈ ಮುಂಚೆ ಇಸ್ರೇಲಿನಲ್ಲಿ ಇಂಥದ್ದು
ಆಗಿಲ್ಲ. ನಾವು ಈಜಿಪ್ಟಿನಿಂದ ಹೊರಬಂದಾಗಿನಿಂದ
ಇಂಥದನ್ನು ನೋಡಿಲ್ಲ. ಇದಕ್ಕೆ ತಕ್ಕ ಕ್ರಮ ಕೈಗೊಳ್ಳುವುದು
ಅವಶ್ಯವಾಗಿದೆ'' ಎಂದು ಅಂದುಕೊಂಡರು.

### ಇಸ್ರೇಲರಿಗೂ ಮತ್ತು ಬೆನ್ಯಾಮೀನ್ಯರಿಗೂ ಯುದ್ಧ

20 ಇಸ್ರೇಲಿನ ಜನರೆಲ್ಲರೂ ಒಟ್ಟಗೂಡಿದರು.
ಮಿಚ್ಪೆ ನಗರದಲ್ಲಿ ಯೆಹೋವನ ಎದುರಿಗೆ
ನಿಲ್ಲುವುದಕ್ಕಾಗಿ ಅವರು ಒಂದು ಕಡೆ ಸೇರಿದ್ದರು.
ಇಸ್ರೇಲಿನ ಎಲ್ಲ ಕಡೆಯಿಂದಲೂ ಜನರು ಬಂದರು.
ಗಿಲ್ಯಾದಿನಲ್ಲಿದ್ದ ಇಸ್ರೇಲರು ಸಹ ಅಲ್ಲಿ ಬಂದಿದ್ದರು.
[2]ಇಸ್ರೇಲಿನ ಎಲ್ಲ ಕುಲಾಧಿಪತಿಗಳು ಅಲ್ಲಿದ್ದರು. ಅವರು
ದೈವಭಕ್ತರ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಿದ್ದರು.
ಯುದ್ಧ ಸನ್ನದ್ಧರಾದ ನಾಲ್ಕು ಲಕ್ಷ ಜನರು ಅಲ್ಲಿದ್ದರು.
[3]ಮಿಚ್ಪೆಯಲ್ಲಿ ಎಲ್ಲಾ ಇಸ್ರೇಲರು ಒಟ್ಟುಗೂಡುತ್ತಿದ್ದಾರೆ
ಎಂಬ ಸಮಾಚಾರ ಬೆನ್ಯಾಮೀನ್ಯರಿಗೆ ತಿಳಿಯಿತು.
ಇಸ್ರೇಲರು, ''ಈ ಭಯಾನಕಕೃತ್ಯ ಹೇಗೆ ನಡೆಯಿತು
ಎಂಬುದನ್ನು ನಮಗೆ ಹೇಳು'' ಎಂದು ಕೇಳಿದರು.

[4]ಆಗ, ಕೊಲೆಗೀಡಾದ ಆ ಸ್ತ್ರೀಯ ಗಂಡನು ನಡೆದ ಕಥೆ
ಯನ್ನು ಹೇಳಿದನು. ಅವನು, ''ನಾನೂ ನನ್ನ ದಾಸಿಯೂ
ಬೆನ್ಯಾಮೀನ್ಯರ ಪ್ರದೇಶವಾದ ಗಿಬೆಯ ನಗರಕ್ಕೆ
ಬಂದೆವು. ಅಲ್ಲಿ ಆ ರಾತ್ರಿ ಇಳಿದುಕೊಂಡೆವು. [5]ಆದರೆ
ರಾತ್ರಿ ಸಮಯದಲ್ಲಿ ಗಿಬೆಯ ನಗರದ ಮುಖಂಡರು
ಬಂದು ನಾವು ಇಳಿದುಕೊಂಡ ಮನೆಗೆ ಮುತ್ತಿಗೆ ಹಾಕಿ
ದರು. ಅವರು ನನ್ನನ್ನು ಕೊಲ್ಲಬೇಕೆಂದಿದ್ದರು. ಅವರು
ನನ್ನ ದಾಸಿಯ ಮೇಲೆ ಬಲಾತ್ಕಾರ ಮಾಡಿದರು; ಆಗ
ಅವಳು ಸತ್ತುಹೋದಳು. [6]ಬಳಿಕ ನಾನು ನನ್ನ ದಾಸಿಯ
ದೇಹವನ್ನು ತುಂಡುತುಂಡಾಗಿ ಕತ್ತರಿಸಿ ಇಸ್ರೇಲರ
ಪ್ರತಿಯೊಂದು ಕುಲಕ್ಕೂ ಒಂದು ತುಂಡನ್ನು ಕಳುಹಿಸಿದೆ.
ಹೀಗೆ ನಾವು ಪಡೆದುಕೊಂಡ ಪ್ರದೇಶಗಳಿಗೆ ಹನ್ನೆರಡು
ತುಂಡುಗಳನ್ನು ಕಳುಹಿಸಿದೆ. ಇಸ್ರೇಲಿನಲ್ಲಿ ಬೆನ್ಯಾ-
ಮೀನ್ಯರು ಇಂಥ ಭಯಾನಕ ಕೃತ್ಯವನ್ನು ಮಾಡಿದ್ದಕ್ಕಾಗಿ
ನಾನು ಇದನ್ನು ಮಾಡಿದೆ. [7]ಈಗ ಇಸ್ರೇಲಿನ ಜನರಾದ
ನೀವೆಲ್ಲರು ಮಾತನಾಡಿರಿ. ನಾವು ಏನು ಮಾಡ
ಬೇಕೆಂಬುದರ ಬಗ್ಗೆ ನಿಮ್ಮ ನಿರ್ಧಾರವನ್ನು ತಿಳಿಸಿರಿ''
ಎಂದು ಕೇಳಿದನು.

[8]ಆಗ ಎಲ್ಲಾ ಜನರು ಏಕಕಾಲದಲ್ಲಿ ಎದ್ದುನಿಂತರು.
ಅವರೆಲ್ಲರು ಒಟ್ಟಾಗಿ, ''ನಮ್ಮಲ್ಲಿ ಯಾರೂ ನಮ್ಮ ಸ್ಥಳ

ಗಳಿಗೆ ಹಿಂದಿರುಗಿ ಹೋಗುವುದಿಲ್ಲ. ನಮ್ಮಲ್ಲಿ ಒಬ್ಬ
ನಾದರೂ ತನ್ನ ಮನೆಗೆ ಹಿಂದಿರುಗಿ ಹೋಗುವುದಿಲ್ಲ.
[9]ಈಗ ಗಿಬೆಯ ನಗರದ ಬಗ್ಗೆ ನಾವು ಚೀಟುಹಾಕೋಣ.
ಆ ಜನರಿಗೆ ಏನು ಮಾಡಬೇಕೆಂಬುದನ್ನು ದೇವರೇ
ನಮಗೆ ತೋರಿಸಿಕೊಡಲಿ. [10]ನಾವು ಇಸ್ರೇಲಿನ ಎಲ್ಲ
ಕುಲಗಳಲ್ಲಿ ಪ್ರತಿ ನೂರು ಮಂದಿಗೆ ಹತ್ತು ಮಂದಿಯನ್ನು
ಆರಿಸಿಕೊಳ್ಳೋಣ. ಪ್ರತಿ ಸಾವಿರ ಮಂದಿಗೆ ನೂರು
ಮಂದಿಯನ್ನು ಆರಿಸಿಕೊಳ್ಳೋಣ. ಪ್ರತಿ ಹತ್ತು ಸಾವಿರ
ಮಂದಿಗೆ ಒಂದು ಸಾವಿರ ಮಂದಿಯನ್ನು ಆರಿಸಿ
ಕೊಳ್ಳೋಣ. ಹೀಗೆ ನಾವು ಆರಿಸಿಕೊಂಡ ಜನರು ಸೈನ್ಯಕ್ಕೆ
ಆಹಾರ ಸರಬರಾಜು ಮಾಡಲಿ. ಆಮೇಲೆ ಬೆನ್ಯಾಮೀನ್ಯರ
ಪ್ರದೇಶದಲ್ಲಿರುವ ಗಿಬೆಯಕ್ಕೆ ಸೈನ್ಯ ಕಳುಹಿಸೋಣ.
ಇಸ್ರೇಲರಿಗೆ ಹೀಗೆ ನಿಂದೆಗೆ ಗುರಿಮಾಡಿದ ದುಷ್ಕರ್ಮಿ
ಗಳಿಗೆ ತಕ್ಕ ಶಿಕ್ಷೆ ದೊರಕಲಿ’’ ಎಂದು ಹೇಳಿದರು.

[11]ಇಸ್ರೇಲಿನ ಎಲ್ಲಾ ಜನರು ಗಿಬೆಯದಲ್ಲಿ ಸೇರಿದರು.
ಅವರು ಏನು ಮಾಡಬೇಕೆಂಬುದನ್ನು ಒಮ್ಮತದಿಂದ
ನಿರ್ಧರಿಸಿದರು. [12]ಇಸ್ರೇಲ್ ಕುಲದವರು ಬೆನ್ಯಾಮೀನ್
ಕುಲದವರಿಗೆ ಒಂದು ಸಂದೇಶವನ್ನು ದೂತನ ಮೂಲಕ
ಕಳುಹಿಸಿದರು. ಆ ಸಂದೇಶ ಹೀಗಿತ್ತು: ‘‘ನಿಮ್ಮವರಾದ
ಕೆಲವು ಜನರು ಮಾಡಿದ ಈ ದುಷ್ಕೃತ್ಯದ ಬಗ್ಗೆ ಏನು ಹೇಳು
ತ್ತೀರಿ. [13]ಆ ನೀಚರನ್ನು ಗಿಬೆಯದಿಂದ ನಮ್ಮಲ್ಲಿಗೆ ಕಳುಹಿ
ಸಿಕೊಡಿ; ಅವರನ್ನು ನಮಗೆ ಒಪ್ಪಿಸಿರಿ. ನಾವು ಅವರನ್ನು
ಕೊಲ್ಲಬೇಕು; ಇಸ್ರೇಲರ ಮಧ್ಯದಲ್ಲಿರುವ ಈ ಪಾಪಿ
ಗಳನ್ನು ನಿರ್ಮೂಲ ಮಾಡಬೇಕು.’’

ಆದರೆ ಬೆನ್ಯಾಮೀನ್ಯರು ತಮ್ಮ ಬಂಧುಗಳಾದ
ಇಸ್ರೇಲರ ಸಂದೇಶವನ್ನು ಕೇಳಲಿಲ್ಲ. [14]ಬೆನ್ಯಾಮೀನ್ಯರು
ತಮ್ಮ ನಗರಗಳನ್ನು ಬಿಟ್ಟು ಇಸ್ರೇಲಿನ ಬೇರೆ ಕುಲಗಳ
ಜನರೊಂದಿಗೆ ಯುದ್ಧಮಾಡಲು ಗಿಬೆಯ ನಗರಕ್ಕೆ
ಹೋದರು. [15]ಬೆನ್ಯಾಮೀನ್ ಕುಲದವರು ಇಪ್ಪತ್ತಾರು
ಸಾವಿರ ಸೈನಿಕರನ್ನು ಒಟ್ಟುಗೂಡಿಸಿದರು. ಆ ಸೈನಿಕರೆಲ್ಲರು
ಯುದ್ಧದ ತರಬೇತಿಯನ್ನು ಪಡೆದವರಾಗಿದ್ದರು. ಗಿಬೆಯ
ನಗರದಲ್ಲಿಯೂ ಏಳುನೂರು ಜನರು ತರಬೇತಿ ಪಡೆದ
ಸೈನಿಕರಾಗಿದ್ದರು. [16]ಇದಲ್ಲದೆ ಎಡಚರಾಗಿದ್ದ ಏಳು
ನೂರು ಮಂದಿ ಸೈನಿಕರು ಸಹ ಅಲ್ಲಿದ್ದರು. ಅವರು ಸಹ
ತರಬೇತಿ ಪಡೆದವರಾಗಿದ್ದರು. ಅವರಲ್ಲಿ ಪ್ರತಿಯೊಬ್ಬನೂ
ಕೂದಲೆಳೆಯಷ್ಟೂ ಗುರಿತಪ್ಪದೆ ಕವಣೆಯನ್ನು ಹೊಡೆ
ಯುವದರಲ್ಲಿ ನಿಪುಣನಾಗಿದ್ದನು.

[17]ಬೆನ್ಯಾಮೀನ್ಯರನ್ನು ಬಿಟ್ಟು ಉಳಿದೆಲ್ಲ ಇಸ್ರೇಲ್
ಕುಲಗಳವರು ಸೇರಿದ್ದರು. ಅವರಲ್ಲಿ ನಾಲ್ಕು ಲಕ್ಷ ಸೈನಿಕರಿ
ದ್ದರು. ಈ ನಾಲ್ಕು ಲಕ್ಷ ಜನರ ಹತ್ತಿರ ಕತ್ತಿಗಳಿದ್ದವು. ಅವ
ರಲ್ಲಿ ಪ್ರತಿಯೊಬ್ಬನು ತರಬೇತಿ ಪಡೆದ ಸೈನಿಕನಾಗಿದ್ದನು.
[18]ಇಸ್ರೇಲಿನ ಜನರು ಬೇತೇಲಿಗೆ ಹೋದರು. ಬೇತೇಲಿ
ನಲ್ಲಿ ಅವರು ‘‘ಯಾವ ಕುಲದವರು ಮೊದಲು
ಬೆನ್ಯಾಮೀನ್ಯರ ಮೇಲೆ ದಾಳಿ ಮಾಡಬೇಕು’’ ಎಂದು
ಯೆಹೋವನನ್ನು ಕೇಳಿದರು.

ಅದಕ್ಕೆ ಯೆಹೋವನು, ‘‘ಯೆಹೂದ ಕುಲದವರು
ಮೊದಲು ಹೋಗಬೇಕು’’ ಎಂದು ಉತ್ತರಿಸಿದನು.

[19]ಮರುದಿನ ಬೆಳಿಗ್ಗೆ ಇಸ್ರೇಲರು ಎದ್ದು ಗಿಬೆಯ
ನಗರದ ಹತ್ತಿರ ಪಾಳೆಯ ಮಾಡಿಕೊಂಡರು. [20]ಇಸ್ರೇಲರ
ಸೈನ್ಯವು ಬೆನ್ಯಾಮೀನ್ಯರ ಸೈನ್ಯದೊಂದಿಗೆ ಯುದ್ಧಮಾಡಲು
ಹೋಯಿತು. ಗಿಬೆಯದಲ್ಲಿ ಇಸ್ರೇಲರ ಸೈನ್ಯವು
ಬೆನ್ಯಾಮೀನ್ಯರ ಸೈನ್ಯದೊಂದಿಗೆ ಯುದ್ಧಮಾಡಲು ಸಿದ್ಧ
ವಾಯಿತು. [21]ಆಗ ಬೆನ್ಯಾಮೀನ್ಯರ ಸೈನ್ಯವು ಗಿಬೆಯ ನಗರ
ದಿಂದ ಹೊರಗೆ ಬಂದಿತು. ಆ ದಿನದ ಯುದ್ಧದಲ್ಲಿ ಬೆನ್ಯಾ
ಮೀನ್ಯರ ಸೈನ್ಯವು ಇಸ್ರೇಲ್ ಸೈನ್ಯದ ಇಪ್ಪತ್ತೆರಡು ಸಾವಿರ
ಜನರನ್ನು ಕೊಂದುಹಾಕಿತು. [22-23]ಇಸ್ರೇಲರು ಯೆಹೋ
ವನ ಬಳಿಗೆ ಹೋಗಿ ಸಾಯಂಕಾಲದವರೆಗೂ ಮೊರೆ
ಯಿಟ್ಟರು. ‘‘ನಾವು ಮತ್ತೆ ಬೆನ್ಯಾಮೀನ್ಯರೊಡನೆ ಯುದ್ಧ
ಮಾಡಲು ಹೋಗ ಬೇಕೇ? ಅವರು ನಮ್ಮ ಬಂಧುಗಳು’’
ಎಂದು ಅವರು ಯೆಹೋವನನ್ನು ಕೇಳಿದರು.

ಅದಕ್ಕೆ ಯೆಹೋವನು, ‘‘ಹೋಗಿರಿ, ಅವರ ವಿರುದ್ಧ
ಯುದ್ಧಮಾಡಿರಿ’’ ಎಂದು ಉತ್ತರಿಸಿದನು. ಇಸ್ರೇಲರು
ಒಬ್ಬರನ್ನೊಬ್ಬರು ಪ್ರೋತ್ಸಾಹಿಸಿದರು. ಮೊದಲನೇ
ದಿನದಂತೆ ಅವರು ಮತ್ತೊಮ್ಮೆ ಯುದ್ಧಕ್ಕೆ ಹೋದರು.

[24]ಆಗ ಇಸ್ರೇಲರ ಸೈನ್ಯವು ಬೆನ್ಯಾಮೀನ್ಯರ ಸೈನ್ಯದ
ಹತ್ತಿರಕ್ಕೆ ಬಂದಿತು. ಇದು ಯುದ್ಧದ ಎರಡನೆಯ ದಿನ
ವಾಗಿತ್ತು. [25]ಎರಡನೆಯ ದಿನವೂ ಬೆನ್ಯಾಮೀನ್ಯರ ಸೈನ್ಯವು
ಇಸ್ರೇಲರ ಸೈನ್ಯದ ಮೇಲೆ ದಾಳಿಮಾಡಲು ಗಿಬೆಯ
ಪಟ್ಟಣದಿಂದ ಹೊರಗೆ ಬಂತು. ಈ ಸಲ ಬೆನ್ಯಾಮೀನ್ಯರ
ಸೈನ್ಯವು ಇಸ್ರೇಲರ ಹದಿನೆಂಟು ಸಾವಿರ ಜನರನ್ನು
ಕೊಂದುಹಾಕಿತು. ಇಸ್ರೇಲ್ ಸೈನ್ಯದ ಆ ಜನರೆಲ್ಲಾ
ತರಬೇತಿ ಪಡೆದ ಸೈನಿಕರಾಗಿದ್ದರು.

[26]ಆಗ ಇಸ್ರೇಲಿನ ಜನರೆಲ್ಲರು ಬೇತೇಲಿಗೆ ಹೋದರು.
ಅಲ್ಲಿ ಅವರು ಕುಳಿತುಕೊಂಡು ಯೆಹೋವನಿಗೆ ಮೊರೆ
ಯಿಟ್ಟರು. ಅವರು ಸಾಯಂಕಾಲದವರೆಗೆ ಏನೂ
ತಿನ್ನಲಿಲ್ಲ. ಇದಲ್ಲದೆ ಅವರು ಯೆಹೋವನಿಗೆ
ಸರ್ವಾಂಗಹೋಮಗಳನ್ನೂ ಸಮಾಧಾನ ಯಜ್ಞಗಳನ್ನೂ
ಸಮರ್ಪಿಸಿದರು.

[27]ಇಸ್ರೇಲರು ಯೆಹೋವನಿಗೆ ಒಂದು ಪ್ರಶ್ನೆಯನ್ನು
ಕೇಳಿದರು. (ಆ ಕಾಲದಲ್ಲಿ ಯೆಹೋವನ ಒಡಂ
ಬಡಿಕೆಯ ಪೆಟ್ಟಿಗೆಯು ಬೇತೇಲಿನಲ್ಲಿತ್ತು. [28]ಫೀನೆ
ಹಾಸನು ಅಲ್ಲಿ ದೇವರಸೇವೆ ಮಾಡುವ ಯಾಜಕನಾಗಿ
ದ್ದನು. ಫೀನೆಹಾಸನು ಎಲ್ಲಾಜಾರನ ಮಗನಾಗಿದ್ದನು.
ಎಲ್ಲಾಜಾರನು ಆರೋನನ ಮಗನಾಗಿದ್ದನು.) ಇಸ್ರೇ
ಲರು, ‘‘ಬೆನ್ಯಾಮೀನ್ಯರು ನಮ್ಮ ಬಂಧುಗಳು. ನಾವು
ಅವರ ವಿರುದ್ಧ ಯುದ್ಧ ಮಾಡುವುದಕ್ಕೆ ಮತ್ತೆ ಹೋಗ

ಬೇಕೇ? ಅಥವಾ ನಾವು ಯುದ್ಧ ಮಾಡುವುದನ್ನು ನಿಲ್ಲಿಸಿ ಬಿಡಬೇಕೇ?'' ಎಂದು ಯೆಹೋವನನ್ನು ಕೇಳಿದರು.

''ಹೋಗಿರಿ, ನಾಳೆ ಅವರನ್ನು ಸೋಲಿಸಲು ನಾನು ನಿಮಗೆ ಸಹಾಯ ಮಾಡುತ್ತೇನೆ'' ಎಂದು ಯೆಹೋವನು ಉತ್ತರಕೊಟ್ಟನು.

29ಆಗ ಇಸ್ರೇಲಿನ ಸೈನಿಕರು ಕೆಲವರನ್ನು ಗಿಬೆಯದ
ಸುತ್ತಲೂ ಅಡಗಿಸಿಟ್ಟರು. 30ಇಸ್ರೇಲಿನ ಸೈನಿಕರು
ಮೂರನೆಯ ದಿನ ಗಿಬೆಯ ನಗರದವರ ವಿರುದ್ಧ
ಯುದ್ಧಮಾಡಲು ಹೋದರು. ಅವರು ಮುಂಚಿನಂತೆ
ಯುದ್ಧಕ್ಕೆ ಸಿದ್ಧರಾದರು. 31ಬೆನ್ಯಾಮೀನ್ಯರ ಸೈನ್ಯವು
ಇಸ್ರೇಲರ ಸೈನ್ಯದೊಂದಿಗೆ ಯುದ್ಧಮಾಡಲು ಗಿಬೆಯ
ನಗರದಿಂದ ಹೊರಗೆ ಬಂದಿತು. ಇಸ್ರೇಲಿನ ಸೈನಿಕರು
ಹಿಮ್ಮೆಟ್ಟಿದರು; ಬೆನ್ಯಾಮೀನ್ಯರು ಅವರನ್ನು ಬೆನ್ನಟ್ಟಿದರು.
ಈ ರೀತಿ ಬೆನ್ಯಾಮೀನ್ಯರ ಸೈನ್ಯವು ನಗರವನ್ನು ಬಿಟ್ಟು
ಬಹಳ ದೂರಹೋಗುವಂತೆ ಮಾಡಿದರು.

ಬೆನ್ಯಾಮೀನ್ಯರ ಸೈನಿಕರು ಮುಂಚಿನಂತೆ ಕೆಲವು ಜನ
ಇಸ್ರೇಲಿ ಸೈನಿಕರನ್ನು ಕೊಲ್ಲಲು ಆರಂಭಿಸಿದರು. ಅವರು
ಸುಮಾರು ಮೂವತ್ತು ಜನ ಇಸ್ರೇಲರನ್ನು ಕೊಂದರು.
ಅವರಲ್ಲಿ ಕೆಲವರನ್ನು ಹೊಲಗಳಲ್ಲಿ ಕೊಂದರು. ಒಂದು
ದಾರಿ ಬೇತೇಲ್ ನಗರಕ್ಕೆ ಹೋಗುತ್ತಿತ್ತು. ಇನ್ನೊಂದು
ದಾರಿ ಗಿಬೆಯಕ್ಕೆ ಹೋಗುತ್ತಿತ್ತು. 32ಬೆನ್ಯಾಮೀನ್ಯರು,
''ಮುಂಚಿನಂತೆ ನಾವು ಗೆಲ್ಲುತ್ತಿದ್ದೇವೆ'' ಎಂದು
ಭಾವಿಸಿದ್ದರು.

ಇಸ್ರೇಲಿನ ಜನರು ಓಡಿಹೋಗುತ್ತಿದ್ದರು. ಆದರೆ
ಇದೊಂದು ತಂತ್ರವಾಗಿತ್ತು. ಅವರು ಬೆನ್ಯಾಮೀನ್ಯರನ್ನು
ನಗರದಿಂದ ಬಹುದೂರ ಕರೆದುಕೊಂಡು ಹೋಗ
ಬೇಕೆಂದಿದ್ದರು. 33ಆದುದರಿಂದ ಎಲ್ಲರೂ ಓಡಿ
ಹೋದರು. ಅವರು ಬಾಳ್ತಾಮರ್ ಎಂಬ ಸ್ಥಳದಲ್ಲಿ
ನಿಂತರು. ಇಸ್ರೇಲಿನ ಕೆಲವು ಜನರು ಗಿಬೆಯದ
ಪಶ್ಚಿಮದಲ್ಲಿ ಅಡಗಿಕೊಂಡಿದ್ದರು. ಅವರು ತಾವು
ಅಡಗಿದ್ದ ಸ್ಥಳಗಳಿಂದ ಓಡಿಹೋಗಿ ಗಿಬೆಯದ ಮೇಲೆ
ದಾಳಿ ಮಾಡಿದರು. 34ಇಸ್ರೇಲಿನ ಹತ್ತು ಸಾವಿರ ಸೈನಿಕರು
ಅಂದರೆ ತರಬೇತಿ ಪಡೆದ ಸೈನಿಕರು ಗಿಬೆಯ ನಗರದ
ಮೇಲೆ ದಾಳಿ ಮಾಡಿದರು. ಘೋರವಾದ ಯುದ್ಧ ನಡೆ
ಯಿತು. ಆದರೆ ಇಂಥ ಭೀಕರ ಪರಿಸ್ಥಿತಿ ಉಂಟಾಗ
ಬಹುದೆಂಬುದು ಬೆನ್ಯಾಮೀನ್ಯರಿಗೆ ತಿಳಿದಿರಲಿಲ್ಲ.

35ಯೆಹೋವನು ಇಸ್ರೇಲಿನ ಸೈನ್ಯದಿಂದ ಬೆನ್ಯಾ
ಮೀನ್ಯರ ಸೈನ್ಯವನ್ನು ಸೋಲಿಸಿದನು. ಆ ದಿನ ಇಸ್ರೇಲಿ
ಸೈನಿಕರು ಬೆನ್ಯಾಮೀನ್ಯರ ಇಪ್ಪತ್ತೈದು ಸಾವಿರದ ನೂರು
ಸೈನಿಕರನ್ನು ಕೊಂದುಹಾಕಿದರು. ಆ ಸೈನಿಕರೆಲ್ಲಾ
ಯುದ್ಧದ ತರಬೇತಿ ಪಡೆದವರಾಗಿದ್ದರು. 36ತಾವು
ಸೋತುಹೋದೆವೆಂಬುದು ಬೆನ್ಯಾಮೀನ್ಯರಿಗೆ ಆಗ
ತಿಳಿಯಿತು.

ಇಸ್ರೇಲರ ಸೈನಿಕರು ಹಿಮ್ಮೆಟ್ಟಿದ್ದರು. ಗಿಬೆಯದ ಹತ್ತಿರ
ಅಡಗಿಕೊಂಡಿದ್ದ ತಮ್ಮ ಜನರು ಹಠಾತ್ ದಾಳಿ
ಮಾಡುವರೆಂದು ನಂಬಿ ಅವರು ಹಿಮ್ಮೆಟ್ಟಿದ್ದರು. 37ಆಗ
ಅಡಗಿಕೊಂಡಿದ್ದ ಜನರು ಗಿಬೆಯದ ನಗರಕ್ಕೆ ನುಗ್ಗಿದರು.
ಅವರು ನಗರದ ಎಲ್ಲ ಕಡೆಗೂ ಹರಡಿ ಎಲ್ಲರನ್ನು ತಮ್ಮ
ಕತ್ತಿಗಳಿಂದ ಕೊಂದುಹಾಕಿದರು. 38ಇಸ್ರೇಲರು ಅಡಗಿ
ಕೊಂಡಿದ್ದ ಜನರಿಗೆ ಒಂದು ಸಂಕೇತ ಕೊಡಬೇಕೆಂದು
ತಿಳಿಸಿದ್ದರು. ಅಡಗಿಕೊಂಡಿದ್ದವರು ಬೆಂಕಿಹಚ್ಚಿ ಆಕಾಶಕ್ಕೆ
ಹೊಗೆ ಏರುವಂತೆ ಮಾಡುವುದೇ ಆ ಸಂಕೇತ.

39-41ಬೆನ್ಯಾಮೀನ್ಯರ ಸೈನಿಕರು ಸುಮಾರು ಮೂವತ್ತು
ಜನ ಇಸ್ರೇಲಿ ಸೈನಿಕರನ್ನು ಕೊಂದುಹಾಕಿದ್ದರು. ಆದು
ದರಿಂದ ಬೆನ್ಯಾಮೀನ್ಯರು, ''ನಾವು ಮುಂಚಿನಂತೆ ಗೆಲ್ಲು
ತ್ತಿದ್ದೇವೆ'' ಎಂದು ಭಾವಿಸಿದ್ದರು. ಆಗ ನಗರದಿಂದ
ಹೊಗೆಯು ಸ್ತಂಭದೋಪಾದಿಯಲ್ಲಿ ಮೇಲೇರುತ್ತಿತ್ತು.
ಬೆನ್ಯಾಮೀನ್ಯರು ಹಿಂತಿರುಗಿ ನೋಡಿದಾಗ ಅವರಿಗೆ
ಹೊಗೆ ಕಾಣಿಸಿತು. ಇಡೀ ನಗರವು ಉರಿಯುತ್ತಿತ್ತು. ಆಗ
ಇಸ್ರೇಲರ ಸೈನಿಕರು ಓಡಿಹೋಗುವುದನ್ನು ನಿಲ್ಲಿಸಿ ಯುದ್ಧ
ಮಾಡುವುದಕ್ಕೆ ಪ್ರಾರಂಭಿಸಿದರು. ಬೆನ್ಯಾಮೀನ್ಯರು
ಅಂಜಿದರು. ಎಂಥ ಭಯಾನಕ ಪರಿಸ್ಥಿತಿ ಉಂಟಾಗಿದೆ
ಎಂಬುದು ಈಗ ಅವರಿಗೆ ಗೊತ್ತಾಯಿತು.

42ಬೆನ್ಯಾಮೀನ್ಯರ ಸೈನಿಕರು ಇಸ್ರೇಲ್ ಸೈನಿಕರಿಂದ
ತಪ್ಪಿಸಿಕೊಂಡು ಓಡತೊಡಗಿದರು. ಅವರು ಮರು
ಭೂಮಿಯ ಕಡೆಗೆ ಓಡಿದರು. ಆದರೆ ಯುದ್ಧದಿಂದ ತಪ್ಪಿಸಿ
ಕೊಳ್ಳುವುದು ಅವರಿಂದ ಆಗಲಿಲ್ಲ. ನಗರಗಳಿಂದ
ಇಸ್ರೇಲರು ಹೊರಬಂದು ಅವರನ್ನು ಕೊಂದರು.
43ಇಸ್ರೇಲರು ಬೆನ್ಯಾಮೀನ್ಯರನ್ನು ಮುತ್ತಿ ಅವರನ್ನು ಅಟ್ಟಿ
ಕೊಂಡು ಹೋದರು. ಅವರನ್ನು ವಿಶ್ರಾಂತಿ ಪಡೆಯಲು
ಬಿಡಲಿಲ್ಲ. ಅವರನ್ನು ಗಿಬೆಯದ ಪೂರ್ವಪ್ರದೇಶದಲ್ಲಿ
ಸೋಲಿಸಿದರು. 44ಬೆನ್ಯಾಮೀನ್ಯರ ಹದಿನೆಂಟುಸಾವಿರ
ಮಂದಿ ಶೂರ ಸೈನಿಕರು ಕೊಲೆಗೀಡಾದರು.

45ಬೆನ್ಯಾಮೀನ್ಯರ ಸೈನಿಕರು ಹಿಂತಿರುಗಿ ಮರು
ಭೂಮಿಯ ಕಡೆಗೆ ಓಡಿದರು. ಅವರು ರಿಮ್ಮೋನ್
ಗಿರಿಯ ಕಡೆಗೆ ಓಡಿಹೋದರು. ಆದರೆ ಇಸ್ರೇಲಿ ಸೈನಿಕರು
ದಾರಿಯ ಉದ್ದಕ್ಕೂ ಐದು ಸಾವಿರ ಬೆನ್ಯಾಮೀನ್ ಸೈನಿಕ
ರನ್ನು ಕೊಂದುಹಾಕಿದರು. ಅವರು ಬೆನ್ಯಾಮೀನ್ಯರನ್ನು
ಬೆನ್ನಟ್ಟುತ್ತಲೇ ಇದ್ದರು. ಅವರನ್ನು ಗಿದೋಮಿನವರೆಗೆ
ಬೆನ್ನಟ್ಟಿಕೊಂಡು ಹೋದರು. ಅಲ್ಲಿ ಇಸ್ರೇಲ್ ಸೈನಿಕರು
ಇನ್ನೂ ಎರಡು ಸಾವಿರ ಜನ ಬೆನ್ಯಾಮೀನ್ಯರನ್ನು ಕೊಂದು
ಹಾಕಿದರು.

46ಆ ದಿನ ಬೆನ್ಯಾಮೀನ್ಯರ ಇಪ್ಪತ್ತೈದು ಸಾವಿರ ಜನ
ಸೈನಿಕರು ಕೊಲ್ಲಲ್ಪಟ್ಟರು. ಅವರೆಲ್ಲರೂ ಕೈಯಲ್ಲಿ ಖಡ್ಗ
ಹಿಡಿದು ಬಹಳ ಶೂರತನದಿಂದ ಯುದ್ಧ ಮಾಡಿದರು.
47ಆದರೆ ಬೆನ್ಯಾಮೀನ್ಯರ ಆರುನೂರು ಜನರು ತಪ್ಪಿಸಿ

ಕೊಂಡು ಮರುಭೂಮಿಗೆ ಓಡಿಹೋದರು. ಅವರು
ರಿಮ್ಮೋನ್ ಗಿರಿ ಎಂಬ ಸ್ಥಳಕ್ಕೆ ಓಡಿಹೋದರು. ಅಲ್ಲಿ
ಅವರು ನಾಲ್ಕು ತಿಂಗಳುಗಳವರೆಗೆ ಇದ್ದರು. 48ಇಸ್ರೇಲರು
ಬೆನ್ಯಾಮೀನ್ಯರ ಪ್ರದೇಶಕ್ಕೆ ಹಿಂತಿರುಗಿ ಹೋದರು.
ಅವರು ಹೋದ ಪ್ರತಿಯೊಂದು ನಗರದಲ್ಲಿ ಅವರ ಎಲ್ಲ
ಪಶುಗಳನ್ನು ಸಹ ಕೊಂದರು. ತಮ್ಮ ಕಣ್ಣಿಗೆ ಬಿದ್ದ ಎಲ್ಲ
ವನ್ನೂ ಅವರು ನಾಶ ಮಾಡಿದರು. ಅವರು ಹೋದ
ಪ್ರತಿಯೊಂದು ನಗರವನ್ನು ಸುಟ್ಟುಹಾಕಿದರು.

### ಬೆನ್ಯಾಮೀನ್ಯರಿಗೆ ಹೆಂಡಂದಿರನ್ನು ದೊರಕಿಸಿದ್ದು

21 ಮಿಚ್ಪೆಯಲ್ಲಿ ಇಸ್ರೇಲಿನ ಜನರು ಒಂದು ಪ್ರತಿಜ್ಞೆ
ಯನ್ನು ಮಾಡಿದ್ದರು. ‘‘ನಮ್ಮಲ್ಲಿ ಯಾರೂ
ನಮ್ಮ ಹೆಣ್ಣು ಮಕ್ಕಳನ್ನು ಬೆನ್ಯಾಮೀನ್ಯರಿಗೆ ಮದುವೆ
ಮಾಡಿ ಕೊಡುವುದಿಲ್ಲ’’ ಎಂಬುದೇ ಆ ಪ್ರತಿಜ್ಞೆ.
2ಇಸ್ರೇಲರು ಬೇತೇಲ ನಗರಕ್ಕೆ ಹೋದರು. ಅಲ್ಲಿ
ಅವರು ಸಾಯಂಕಾಲದವರೆಗೆ ದೇವರ ಮುಂದೆ ಕುಳಿತು
ಕೊಂಡರು. ಅಲ್ಲಿ ಕುಳಿತುಕೊಂಡು ಅವರು ಗಟ್ಟಿಯಾಗಿ
ಅತ್ತರು. 3ಅವರು ದೇವರಿಗೆ, ‘‘ಯೆಹೋವನೇ, ನೀನು
ಇಸ್ರೇಲರ ದೇವರು. ನಮಗೆ ಇಂಥ ಭಯಾನಕ ಪರಿಸ್ಥಿತಿ
ಏಕೆ ಉಂಟಾಯಿತು? ಇಸ್ರೇಲಿನ ಒಂದು ಕುಲವು
ನಾಶವಾಯಿತಲ್ಲಾ?’’ ಎಂದು ಮೊರೆಯಿಟ್ಟರು.
4ಮರುದಿನ ಬೆಳಿಗ್ಗೆ ಅವರು ಒಂದು ಯಜ್ಞವೇದಿಕೆ
ಯನ್ನು ಕಟ್ಟಿದರು. ಅವರು ಆ ಯಜ್ಞವೇದಿಕೆಯ ಮೇಲೆ
ಸರ್ವಾಂಗಹೋಮಗಳನ್ನು, ಸಮಾಧಾನಯಜ್ಞಗಳನ್ನು
ಸಮರ್ಪಿಸಿದರು. 5ಆಮೇಲೆ ಇಸ್ರೇಲರು, ‘‘ಯೆಹೋವನ
ಮುಂದೆ ಸಭೆಸೇರಿದಾಗ ಅದಕ್ಕೆ ಬಾರದೆ ಇದ್ದಂಥ
ಇಸ್ರೇಲರು ಯಾರಾದರೂ ಇದ್ದಾರೆಯೇ’’ ಎಂದು
ವಿಚಾರಮಾಡಿದರು. ಮಿಚ್ಪೆ ನಗರದಲ್ಲಿ ಬೇರೆ ಕುಲಗಳ
ಜೊತೆಗೆ ಯಾರು ಸೇರುವುದಿಲ್ಲವೋ ಅವರನ್ನು ಕೊಲೆ
ಮಾಡುವುದಾಗಿ ಅವರು ಪ್ರತಿಜ್ಞೆ ಮಾಡಿದ್ದರು. ಅದಕ್ಕಾಗಿ
ಅವರು ಅದರ ಬಗ್ಗೆ ವಿಚಾರಮಾಡಿದರು.
6ಆಗ ಇಸ್ರೇಲರು ತಮ್ಮ ಬಂಧುಗಳಾದ ಬೆನ್ಯಾಮೀನ್ಯರ
ಬಗ್ಗೆ ವ್ಯಥೆಪಟ್ಟರು. ಅವರು, ‘‘ಇಂದು ಇಸ್ರೇಲರಿಂದ
ಒಂದು ಕುಲವು ಇಲ್ಲವಾಯಿತು. 7ನಮ್ಮ ಹೆಣ್ಣುಮಕ್ಕಳು
ಬೆನ್ಯಾಮೀನ್ಯರನ್ನು ಮದುವೆಯಾಗಲು ಬಿಡುವುದಿಲ್ಲ
ವೆಂದು ನಾವು ಯೆಹೋವನ ಎದುರಿಗೆ ಪ್ರತಿಜ್ಞೆ ಮಾಡಿ
ದ್ದೇವೆ. ಇನ್ನು ಮುಂದೆ ಬೆನ್ಯಾಮೀನ್ಯರಿಗೆ ಹೆಂಡಂದಿರನ್ನು
ದೊರಕಿಸುವುದು ಹೇಗೆ?’’ ಎಂದು ಅವರು
ಯೋಚಿಸಿದರು.
8ಆಗ ಇಸ್ರೇಲರು, ‘‘ಇಲ್ಲಿ ಮಿಚ್ಪೆಗೆ ಇಸ್ರೇಲರಲ್ಲಿ
ಬರದಿರುವವರು ಯಾರಾದರೂ ಇರುವರೇ?’’ಎಂದು
ವಿಚಾರಮಾಡಿದರು. ಆಗ ಯಾಬೇಷ್ ಗಿಲ್ಯಾದ್
ನಗರದವರಲ್ಲಿ ಯಾರೂ ಬಂದಿಲ್ಲವೆಂದು ಗೊತ್ತಾಯಿತು.
9ಇಸ್ರೇಲರಲ್ಲಿ ಯಾರು ಅಲ್ಲಿದ್ದಾರೆ, ಯಾರು ಅಲ್ಲಿಲ್ಲ
ಎಂಬುದನ್ನು ಲೆಕ್ಕಹಾಕಿ ನೋಡಿದರು. ಯಾಬೇಷ್
ಗಿಲ್ಯಾದಿನವರಲ್ಲಿ ಯಾರೂ ಬಂದಿಲ್ಲ ಎಂಬುದು
ಖಚಿತವಾಯಿತು. 10ಇಸ್ರೇಲರು ಯಾಬೇಷ್ ಗಿಲ್ಯಾದಿಗೆ
ಹನ್ನೆರಡು ಸಾವಿರ ಸೈನಿಕರನ್ನು ಕಳುಹಿಸಿದರು . ಅವರು
ಆ ಸೈನಿಕರಿಗೆ, ‘‘ಯಾಬೇಷ್ ಗಿಲ್ಯಾದಿಗೆ ಹೋಗಿರಿ;
ಹೆಂಗಸರು ಮತ್ತು ಮಕ್ಕಳ ಸಮೇತ ಪ್ರತಿಯೊಬ್ಬರನ್ನೂ
ನಿಮ್ಮ ಕತ್ತಿಯಿಂದ ಕೊಂದುಹಾಕಿರಿ. 11ನೀವು ಇದನ್ನು
ಮಾಡಲೇಬೇಕು. ನೀವು ಯಾಬೇಷ್ ಗಿಲ್ಯಾದಿನಲ್ಲಿರುವ
ಪ್ರತಿಯೊಬ್ಬ ಮನುಷ್ಯನನ್ನು ಕೊಲ್ಲಬೇಕು. ಗಂಡಸಿ
ನೊಂದಿಗೆ ಲೈಂಗಿಕಸಂಪರ್ಕ ಹೊಂದಿದ ಪ್ರತಿಯೊಬ್ಬ
ಹೆಂಗಸನ್ನೂ ನೀವು ಕೊಂದುಹಾಕಬೇಕು. ಆದರೆ
ಕನ್ಯೆಯರನ್ನು ನೀವು ಕೊಲ್ಲಬಾರದು’’ ಎಂದು ಹೇಳಿ
ದರು. ಆ ಸೈನಿಕರು ಹಾಗೆಯೇ ಮಾಡಿದರು. 12ಆ
ಹನ್ನೆರಡು ಸಾವಿರ ಸೈನಿಕರು ಯಾಬೇಷ್ ಗಿಲ್ಯಾದಿನಲ್ಲಿ
ಗಂಡಸಿನೊಂದಿಗೆ ಎಂದೂ ಲೈಂಗಿಕ ಸಂಪರ್ಕ ಹೊಂದದ
ನಾನೂರು ಜನ ಯುವತಿಯರನ್ನು ಗುರುತಿಸಿದರು. ಆ
ಯುವತಿಯರನ್ನು ಸೈನಿಕರು ಶೀಲೋವಿನಲ್ಲಿದ್ದ ಪಾಳೆ
ಯಕ್ಕೆ ಕರೆತಂದರು. ಶೀಲೋವ್ ಕಾನಾನ್
ಪ್ರದೇಶದಲ್ಲಿದೆ.
13ಇಸ್ರೇಲರು ಬೆನ್ಯಾಮೀನ್ಯರಿಗೆ ಒಂದು ಸಂದೇಶವನ್ನು
ಕಳುಹಿಸಿದರು. ಅವರು ಬೆನ್ಯಾಮೀನ್ಯರೊಂದಿಗೆ
ಶಾಂತಿಯ ಪ್ರಸ್ತಾಪವನ್ನು ಮಾಡಿದರು. ಬೆನ್ಯಾಮೀನ್ಯರು
ರಿಮ್ಮೋನ್ ಗಿರಿ ಎಂಬ ಸ್ಥಳದಲ್ಲಿದ್ದರು. 14ಬೆನ್ಯಾ-
ಮೀನ್ಯರು ಇಸ್ರೇಲಿಗೆ ಹಿಂತಿರುಗಿ ಬಂದರು. ಇಸ್ರೇಲರು
ಯಾಬೇಷ್ ಗಿಲ್ಯಾದಿನಿಂದ ಕೊಲ್ಲದೆ ತಂದಿದ್ದ ಸ್ತ್ರೀ
ಯರನ್ನು ಅವರಿಗೆ ಕೊಟ್ಟರು. ಆದರೂ ಬೆನ್ಯಾಮೀನ್ಯರ
ಎಲ್ಲಾ ಗಂಡಸರಿಗೆ ಸಾಕಾಗುವಷ್ಟು ಸ್ತ್ರೀಯರು ಇರಲಿಲ್ಲ.
15ಇಸ್ರೇಲರು ಬೆನ್ಯಾಮೀನ್ಯರಿಗಾಗಿ ವ್ಯಥೆಪಟ್ಟರು.
ಏಕೆಂದರೆ ಯೆಹೋವನು ಅವರನ್ನು ಇಸ್ರೇಲಿನ ಉಳಿದ
ಕುಲದವರಿಂದ ಪ್ರತ್ಯೇಕಗೊಳಿಸಿದ್ದನು. 16ಇಸ್ರೇಲರ
ಹಿರಿಯರು, ‘‘ಬೆನ್ಯಾಮೀನ್ಯರ ಹೆಂಗಸರು ಕೊಲೆಗೀಡಾಗಿ
ದ್ದಾರೆ. ಈಗ ಜೀವಂತವಿದ್ದ ಬೆನ್ಯಾಮೀನ್ ಗಂಡಸರಿಗೆ
ಹೆಂಡಂದಿರನ್ನು ಎಲ್ಲಿಂದ ತರುವುದು? 17ಜೀವಂತ
ವಿರುವ ಬೆನ್ಯಾಮೀನ್ಯರು ತಮ್ಮ ವಂಶವನ್ನು ಮುಂದುವ
ರಿಸುವುದಕ್ಕೆ ಮಕ್ಕಳನ್ನು ಪಡೆಯಬೇಕು. ಆಗ ಇಸ್ರೇಲರ
ಒಂದು ಕುಲವು ಅಳಿಯದೆ ಉಳಿಯುವುದು. 18ಆದರೆ
ನಾವೂ ನಮ್ಮ ಹೆಣ್ಣು ಮಕ್ಕಳೂ ಬೆನ್ಯಾಮೀನ್ಯರೊಂದಿಗೆ
ಮದುವೆಯಾಗಲು ಒಪ್ಪುವಂತಿಲ್ಲ. ಏಕೆಂದರೆ ‘ಬೆನ್ಯಾ-
ಮೀನ್ಯರಿಗೆ ಯಾರಾದರೂ ಹೆಣ್ಣನ್ನು ಕೊಟ್ಟರೆ ಅವರು
ಶಾಪಗ್ರಸ್ತರಾಗುತ್ತಾರೆ’ ಎಂದು ನಾವೇ ಆಣೆ ಇಟ್ಟಿದ್ದೇವೆ.
19ನಮಗೊಂದು ವಿಚಾರಹೊಳೆದಿದೆ. ಇದು ಶೀಲೋವಿ
ನಲ್ಲಿ ಯೆಹೋವನ ಉತ್ಸವ ನಡೆಯುವ ಕಾಲ. ಈ

ಉತ್ಸವವನ್ನು ಅಲ್ಲಿ ಪ್ರತಿವರ್ಷ ಆಚರಿಸಲಾಗುತ್ತದೆ.'' (ಶೀಲೋವ್ ನಗರವು ಬೇತೇಲ ನಗರದ ಉತ್ತರಕ್ಕೂ ಬೇತೇಲಿನಿಂದ ಶೆಕೆಮಿಗೆ ಹೋಗುವ ದಾರಿಯ ಪೂರ್ವಕ್ಕೂ ಲೆಬೋನಿನ ದಕ್ಷಿಣಕ್ಕೂ ಇದೆ.)

20 ಹಿರಿಯರು ಬೆನ್ಯಾಮೀನ್ಯರಿಗೆ ತಮ್ಮ ವಿಚಾರದ ಬಗ್ಗೆ
ಹೇಳಿದರು. ಅವರು, ''ನೀವು ಹೋಗಿ ದ್ರಾಕ್ಷೆಯ ತೋಟ
ಗಳಲ್ಲಿ ಅಡಗಿಕೊಳ್ಳಿರಿ. 21 ಉತ್ಸವಕಾಲದಲ್ಲಿ ಶೀಲೋವಿನ
ಯುವತಿಯರು ನಾಟ್ಯಕ್ಕೆ ಬರುವ ಸಮಯವನ್ನು ನಿರೀಕ್ಷಿಸುತ್ತಿರಿ. ಅವರು ಬಂದ ತಕ್ಷಣ ನೀವು ಅಡಗಿಕೊಂಡಿದ್ದ ಸ್ಥಳದಿಂದ ಹೊರಗೆ ಬನ್ನಿ; ನಿಮ್ಮಲ್ಲಿ ಪ್ರತಿಯೊಬ್ಬನು ಒಬ್ಬೊಬ್ಬ ಶೀಲೋವಿನ ಯುವತಿಯನ್ನು ತೆಗೆದುಕೊಳ್ಳಿರಿ. ಆ ಯುವತಿಯರನ್ನು ಬೆನ್ಯಾಮೀನ್ಯರ ಪ್ರದೇಶಕ್ಕೆ ಕರೆದುಕೊಂಡು ಹೋಗಿ ಮದುವೆಯಾಗಿರಿ.

22 ಆ ಯುವತಿಯರ ತಂದೆಗಳಾಗಲೀ ಸಹೋದರರಾಗಲೀ ನಮ್ಮಲ್ಲಿಗೆ ಬಂದು ದೂರು ಹೇಳುತ್ತಾರೆ. ಆಗ ನಾವು ಅವರಿಗೆ, 'ಬೆನ್ಯಾಮೀನ್ಯರ ಗಂಡಸರಿಗೆ ದಯೆ ತೋರಿಸಿರಿ; ಅವರು ಆ ಸ್ತ್ರೀಯರನ್ನು ಮದುವೆಯಾಗಲಿ. ಅವರು ನಿಮ್ಮಿಂದ ನಿಮ್ಮ ಹೆಣ್ಣುಮಕ್ಕಳನ್ನು ತೆಗೆದುಕೊಂಡು ಹೋಗಿರುವರೇ ಹೊರತು ಯುದ್ಧವೇನೂ ಮಾಡಿಲ್ಲ. ಅವರು ಕನ್ಯೆಯರನ್ನು ತೆಗೆದುಕೊಂಡು ಹೋದದ್ದರಿಂದ ನೀವು ದೇವರೆದುರಿಗೆ ಮಾಡಿದ ಪ್ರತಿಜ್ಞೆಯನ್ನು ಮುರಿದಂತಾಗುವುದಿಲ್ಲ. ನಿಮ್ಮ ಕನ್ಯೆಯರನ್ನು ಅವರಿಗೆ ಕೊಡುವುದಿಲ್ಲವೆಂದು ನೀವು ಪ್ರತಿಜ್ಞೆ ಮಾಡಿದ್ದೀರಿ. ನೀವು ಬೆನ್ಯಾಮೀನ್ಯರಿಗೆ ನಿಮ್ಮ ಕನ್ಯೆಯರನ್ನು ಕೊಟ್ಟಿಲ್ಲ. ಆದರೆ ಅವರು ನಿಮ್ಮ ಕನ್ಯೆಯರನ್ನು ತೆಗೆದುಕೊಂಡು ಹೋದರು. ಆದುದರಿಂದ ನೀವು ನಿಮ್ಮ ಪ್ರತಿಜ್ಞೆಯನ್ನು ಮುರಿಯಲಿಲ್ಲ ಎಂದು ಹೇಳುತ್ತೇವೆ''' ಎಂದರು.

23 ಆದರಂತೆಯೇ ಬೆನ್ಯಾಮೀನ್ ಕುಲದ ಗಂಡಸರು, ನಾಟ್ಯವಾಡಲು ಬಂದಿದ್ದ ಯುವತಿಯರಲ್ಲಿ, ತಮ್ಮ ಸಂಖ್ಯೆಗೆ ಸರಿಯಾಗುವಷ್ಟು ಮಂದಿಯನ್ನು ತಮ್ಮ ಹೆಂಡತಿಯರನ್ನಾಗಿ ತೆಗೆದುಕೊಂಡು ತಮ್ಮ ಪ್ರದೇಶಕ್ಕೆ ಹಿಂತಿರುಗಿ ಹೋದರು. ಆ ಪ್ರದೇಶದಲ್ಲಿ ಬೆನ್ಯಾಮೀನ್ಯರು ಪುನಃ
ನಗರಗಳನ್ನು ಕಟ್ಟಿ ವಾಸಮಾಡಿದರು. 24 ಅನಂತರ
ಇಸ್ರೇಲರು ತಮ್ಮತಮ್ಮ ಕುಲಗೋತ್ರಗಳವರಿಗೆ ಸ್ವಾಸ್ಥ್ಯವಾಗಿ ಸಿಕ್ಕಿದ ಪ್ರದೇಶಗಳಿಗೆ ಹಿಂತಿರುಗಿ ಹೋದರು.

25 ಆ ಕಾಲದಲ್ಲಿ ಇಸ್ರೇಲರಿಗೆ ಅರಸನಿರಲಿಲ್ಲ. ಪ್ರತಿಯೊಬ್ಬನು ತನಗೆ ಸರಿತೋರಿದಂತೆ ಮಾಡುತ್ತಿದ್ದನು.

# ರೂತಳು

### ಯೆಹೂದದಲ್ಲಿ ಬರಗಾಲ

1 ನ್ಯಾಯಾಧೀಶರು ಆಳುತ್ತಿದ್ದಾಗ ಬರಗಾಲ ಬಂತು.
ಆಗ ಎಲೀಮೆಲೆಕನೆಂಬ ಒಬ್ಬ ಮನುಷ್ಯನು ತನ್ನ
ಹೆಂಡತಿ ಮತ್ತು ಇಬ್ಬರು ಗಂಡು ಮಕ್ಕಳೊಡನೆ ಯೆಹೂದ
ಪ್ರಾಂತದ ಬೆತ್ಲೆಹೇಮ್ ನಗರವನ್ನು ಬಿಟ್ಟು ಮೋವಾಬ್
ಬೆಟ್ಟಪ್ರದೇಶಕ್ಕೆ ಹೋದನು. 2 ಅವನ ಹೆಂಡತಿಯ ಹೆಸರು
'ನೊವೊಮಿ.' ಅವನ ಇಬ್ಬರು ಗಂಡುಮಕ್ಕಳ ಹೆಸರು
ಗಳು: ಮಹ್ಲೋನ್ ಮತ್ತು ಕಿಲ್ಯೋನ್. ಅವರು
ಯೆಹೂದ ಪ್ರಾಂತದ ಎಫ್ರಾತಿಗೆ ಸೇರಿದ ಬೆತ್ಲೆಹೇಮಿನ
ನಿವಾಸಿಗಳು. ಇವರು ಮೋವಾಬ್ ಬೆಟ್ಟಪ್ರದೇಶಕ್ಕೆ
ಹೋಗಿ ಅಲ್ಲಿಯೇ ನೆಲೆಸಿದರು.
3 ಕೆಲವು ದಿನಗಳಾದ ಮೇಲೆ ನೊವೊಮಿಯ ಗಂಡ
ನಾದ ಎಲೀಮೆಲೆಕನು ಮರಣಹೊಂದಿದನು.
ನೊವೊಮಿ ಮತ್ತು ಆಕೆಯ ಇಬ್ಬರು ಗಂಡುಮಕ್ಕಳು ಅಲ್ಲಿ
ತಮ್ಮ ಜೀವನವನ್ನು ಮುಂದುವರಿಸಿದರು. 4 ಆಕೆಯ
ಗಂಡು ಮಕ್ಕಳು ಮೋವಾಬ್ ದೇಶದ ಸ್ತ್ರೀಯರನ್ನು
ಮದುವೆಯಾದರು. ಒಬ್ಬನ ಹೆಂಡತಿಯ ಹೆಸರು ಒರ್ಫಾ,
ಇನ್ನೊಬ್ಬನ ಹೆಂಡತಿಯ ಹೆಸರು ರೂತ್. ಅವರು
ಮೋವಾಬ್‌ನಲ್ಲಿ ಸುಮಾರು ಹತ್ತು ವರ್ಷವಿದ್ದರು.
5 ಬಳಿಕ ಮಹ್ಲೋನ್ ಮತ್ತು ಕಿಲ್ಯೋನ್ ಸಹ ಸತ್ತು
ಹೋದರು. ಹೀಗಾಗಿ ನೊವೊಮಿಯು ತನ್ನ ಗಂಡನನ್ನೂ
ಇಬ್ಬರು ಗಂಡುಮಕ್ಕಳನ್ನೂ ಕಳೆದುಕೊಂಡಳು.

### ಸ್ವದೇಶಕ್ಕೆ ನೊವೊಮಿಯ ಪ್ರಯಾಣ

6 ನೊವೊಮಿಯು ಮೋವಾಬ್ ಬೆಟ್ಟಪ್ರದೇಶದಲ್ಲಿ
ದ್ದಾಗ ಯೆಹೋವನು ತನ್ನ ಜನರಿಗೆ ಕರುಣೆತೋರಿ
ಆಹಾರವನ್ನು ಒದಗಿಸಿರುವ ಸುದ್ದಿಯು ನೊವೊಮಿಗೆ ತಿಳಿ
ಯಿತು. ಆದುದರಿಂದ ಆಕೆಯು ಮೋವಾಬ್ ಬೆಟ್ಟ
ಪ್ರದೇಶವನ್ನು ಬಿಟ್ಟು ತನ್ನ ಊರಿಗೆ ಹೋಗಲು ನಿರ್ಧರಿ
ಸಿದಳು. ಅವಳ ಸೊಸೆಯಂದಿರು ಸಹ ಅವಳ ಸಂಗಡ
ಹೋಗಲು ತೀರ್ಮಾನಿಸಿದರು. 7 ಅವಳು ಮತ್ತು ಅವಳ
ಸೊಸೆಯಂದಿರು ತಾವು ಈವರೆಗೆ ಇದ್ದ ಸ್ಥಳವನ್ನು ಬಿಟ್ಟು
ಯೆಹೂದ ಪ್ರಾಂತಕ್ಕೆ ಹೊರಟರು. 8 ಆಗ ನೊವೊಮಿ
ತನ್ನ ಸೊಸೆಯಂದಿರಿಗೆ, '' ನೀವಿಬ್ಬರೂ ನಿಮ್ಮ ತಂದೆ
ತಾಯಿಗಳ ಮನೆಗೆ ಹೋಗಿ. ನೀವು ನನ್ನನ್ನೂ
ಸತ್ತುಹೋದ ನನ್ನ ಇಬ್ಬರು ಮಕ್ಕಳನ್ನೂ ತುಂಬ
ಪ್ರೀತಿಯಿಂದ ನೋಡಿ ಕೊಂಡಿದ್ದೀರಿ. ಯೆಹೋವನು
ನಿಮಗೆ ಅಷ್ಟೇ ಕೃಪೆ ಯನ್ನೂ ಪ್ರೀತಿಯನ್ನೂ ತೋರಲಿ
ಎಂದು ನಾನು ಪ್ರಾರ್ಥಿಸುತ್ತೇನೆ. 9 ನೀವಿಬ್ಬರೂ ಮದುವೆ
ಮಾಡಿ ಕೊಂಡು ಒಳ್ಳೆಯ ಕುಟುಂಬವನ್ನು
ಹೊಂದಿಕೊಳ್ಳಲು ಯೆಹೋವನು ನಿಮಗೆ ಸಹಾಯ
ಮಾಡಲಿ ಎಂದು ನಾನು ಪ್ರಾರ್ಥಿಸುತ್ತೇನೆ'' ಎಂದು ಹೇಳಿ
ತನ್ನ ಸೊಸೆಯಂದಿರಿಗೆ ಮುದ್ದಿಟ್ಟಳು. ಅವರೆಲ್ಲರೂ ಅಳ
ತೊಡಗಿದರು. 10 ಅವಳ ಸೊಸೆಯಂದಿರು, ''ನಾವು ನಿನ್ನ
ಸಂಗಡ ಬಂದು ನಿನ್ನ ಜನರೊಡನೆ ಇರುತ್ತೇವೆ'' ಎಂದರು.
11 ಆದರೆ ನೊವೊಮಿ, ''ಬೇಡ ಮಕ್ಕಳೇ, ನಿಮ್ಮ ಮನೆ
ಗಳಿಗೆ ಹಿಂತಿರುಗಿಹೋಗಿರಿ. ನನ್ನ ಸಂಗಡ ನೀವೇಕೆ ಬರ
ಬೇಕು? ನಾನು ನಿಮಗೆ ಸಹಾಯ ಮಾಡಲಾರೆ. ನಿಮ್ಮನ್ನು
ಮದುವೆಯಾಗುವಂಥ ಗಂಡುಮಕ್ಕಳು ನನ್ನಲ್ಲಿಲ್ಲ.
12 ನಿಮ್ಮ ತವರೂರಿಗೆ ಹೋಗಿರಿ! ನಾನು ಇನ್ನೊಂದು
ಮದುವೆಯಾಗುವುದಕ್ಕೂ ಸಾಧ್ಯವಿಲ್ಲ. ನನಗೆ ತುಂಬಾ
ವಯಸ್ಸಾಗಿದೆ. ನಾನು ನಿಮಗೆ ಸಹಾಯ ಮಾಡಲಾರೆ.
ನಾನು ಇಂದು ರಾತ್ರಿಯೇ ಗರ್ಭಧರಿಸಿ ಇಬ್ಬರು ಗಂಡು
ಮಕ್ಕಳನ್ನು ಹೆತ್ತರೂ ನಿಮಗೆ ಅದರಿಂದ ಪ್ರಯೋಜ
ನವಿಲ್ಲ. 13 ನೀವು ಅವರನ್ನು ಮದುವೆಯಾಗಬೇಕಾದರೆ
ಅವರು ಬೆಳೆದು ಪ್ರಾಯಕ್ಕೆ ಬರುವವರೆಗೆ ಕಾದು
ಕೊಂಡಿರಬೇಕಾಗುತ್ತದೆ. ನೀವು ಗಂಡಂದಿರ ಸಲುವಾಗಿ
ಅಷ್ಟುಕಾಲ ಕಾದುಕೊಂಡಿರುವುದು ನನಗಿಷ್ಟವಿಲ್ಲ. ಅದು
ನನಗೆ ದುಃಖವನ್ನು ಉಂಟುಮಾಡುತ್ತದೆ. ನಿಮ್ಮ ಕುರಿತು
ನಾನು ತುಂಬಾ ದುಃಖಪಡುತ್ತೇನೆ, ದೇವರ ಹಸ್ತವು ನನಗೆ
ವಿರುದ್ಧವಾಗಿದೆ'' ಎಂದು ಹೇಳಿದಳು.
14 ಅವರೆಲ್ಲರೂ ಮತ್ತೊಮ್ಮೆ ಗಟ್ಟಿಯಾಗಿ ಅತ್ತರು.
ಒರ್ಫಳು ನೊವೊಮಿಗೆ ಮುದ್ದಿಟ್ಟು ಹೊರಟು
ಹೋದಳು. ಆದರೆ ರೂತಳು ಅವಳನ್ನು ಮುದ್ದಿಟ್ಟು ಆಕೆ
ಯೊಂದಿಗೆ ಉಳಿದುಕೊಂಡಳು. 15 ನೊವೊಮಿಯು
ಆಕೆಗೆ, ''ನೋಡು, ನಿನ್ನ ಓರಗಿತ್ತಿಯು ಮತ್ತೆ ತನ್ನ ಜನರ
ಬಳಿಗೂ ತನ್ನ ದೇವತೆಗಳ ಬಳಿಗೂ ಹೋಗುತ್ತಿದ್ದಾಳೆ.
ನೀನೂ ಹಾಗೆಯೇ ಮಾಡು'' ಎಂದು ಹೇಳಿದಳು.

[16]ಅದಕ್ಕೆ ರೂತಳು,‘‘ನಿನ್ನನ್ನು ಬಿಟ್ಟು ಸ್ವಜನರ ಬಳಿಗೆ
ಹಿಂದಿರುಗಿ ಹೋಗೆಂದು ನನಗೆ ಒತ್ತಾಯ ಮಾಡಬೇಡ.
ನೀನು ಎಲ್ಲಿಗೆ ಹೋದರೂ ನಾನೂ ಅಲ್ಲಿಗೆ ಬರುವೆನು.
ನೀನು ವಾಸಿಸುವಲ್ಲೇ ನಾನೂ ವಾಸಿಸುವೆನು. ನಿನ್ನ ಜನರೇ
ನನ್ನ ಜನರು; ನಿನ್ನ ದೇವರೇ ನನ್ನ ದೇವರು. [17]ನೀನು
ಸಾಯುವಲ್ಲೇ ನಾನೂ ಸಾಯುವೆನು; ಅಲ್ಲಿಯೇ ನನಗೆ
ಸಮಾಧಿಯಾಗಬೇಕು. ಈ ಪ್ರತಿಜ್ಞೆಯನ್ನು ನಾನು
ಪೂರ್ಣಗೊಳಿಸದಿದ್ದರೆ ನನ್ನನ್ನು ಶಿಕ್ಷಿಸು ಎಂದು ನಾನು
ಯೆಹೋವನಲ್ಲಿ ಕೇಳಿಕೊಳ್ಳುತ್ತೇನೆ. ಮರಣವು ಮಾತ್ರ
ನಮ್ಮಿಬ್ಬರನ್ನು ಅಗಲಿಸಬಲ್ಲದು’’ ಎಂದು ದೃಢವಾಗಿ
ಹೇಳಿದಳು.

## ಸ್ವದೇಶಕ್ಕೆ ಆಗಮನ

[18]ರೂತಳು ತನ್ನ ಜೊತೆಗೆ ಬರಲು ದೃಢನಿಶ್ಚಯ
ಮಾಡಿರುವುದು ನೊವೊಮಿಗೆ ತಿಳಿಯಿತು. ಆದ್ದರಿಂದ
ನೊವೊಮಿಯು ರೂತಳೊಡನೆ ವಾದಮಾಡಲಿಲ್ಲ.
[19]ಅವರಿಬ್ಬರೂ ಪ್ರಯಾಣಮಾಡಿ ಬೆತ್ಲೆಹೇಮ್ ಊರಿಗೆ
ತಲುಪಿದರು. ಅವರಿಬ್ಬರನ್ನು ಕಂಡಾಗ ಬೆತ್ಲೆಹೇಮ್ ಪಟ್ಟ
ಣದ ಜನರಿಗೆ ಆಶ್ಚರ್ಯವಾಯಿತು. ‘‘ಇವಳು
ನೊವೊಮಿಯೇ?’’ ಎಂದು ಅವರು ಕೇಳಿದರು.
[20]ಆದರೆ ನೊವೊಮಿಯು ಜನರಿಗೆ, ‘‘ನನ್ನನ್ನು
ನೊವೊಮಿ* ಎಂದು ಕರೆಯದೆ, ನನ್ನನ್ನು ಮಾರಾ*
ಎಂದು ಕರೆಯಿರಿ. ಏಕೆಂದರೆ ಸರ್ವಶಕ್ತನಾದ ದೇವರು
ನನ್ನ ಜೀವನವನ್ನು ದುಃಖಕರವನ್ನಾಗಿ ಮಾಡಿದ್ದಾನೆ.
[21]ಇಲ್ಲಿಂದ ಹೋಗುವಾಗ ಭಾಗ್ಯವಂತಳಾಗಿ ಹೋದೆನು;
ಆದರೆ ಈಗ ಯೆಹೋವನು ನನ್ನನ್ನು ಬರಿಗೈಯಲ್ಲಿ ಮನೆಗೆ
ಕರೆತಂದಿದ್ದಾನೆ. ಯೆಹೋವನು ನನ್ನನ್ನು ದುಃಖಿತಳನ್ನಾಗಿ
ಮಾಡಿದ್ದಾನೆ. ಹೀಗಿರುವಾಗ ನೀವೇಕೆ ನನ್ನನ್ನು
‘ನೊವೊಮಿ’ ಎಂದು ಕರೆಯಬೇಕು? ಸರ್ವಶಕ್ತನಾದ
ದೇವರು ನನಗೆ ಸಾಕಷ್ಟು ಕಷ್ಟ ಕೊಟ್ಟಿದ್ದಾನೆ’’ ಎಂದು
ಹೇಳಿದಳು. [22]ಹೀಗೆ ನೊವೊಮಿ ಮತ್ತು ಅವಳ ಸೊಸೆ
ರೂತಳು (ಮೋವಾಬ್ ದೇಶದವಳು) ಮೋವಾಬ್
ಬೆಟ್ಟಪ್ರದೇಶ ದಿಂದ ಹಿಂದಿರುಗಿ ಬಂದರು. ಯೆಹೂದ
ದೇಶದ ಬೇತ್ಲೆಹೇಮಿಗೆ ಇವರಿಬ್ಬರೂ ಜವೆಗೋಧಿಯ
ಸುಗ್ಗಿಯ ಆರಂಭಕಾಲದಲ್ಲಿ ಬಂದರು.

## ರೂತಳಿಗೆ ಬೋವಜನ ಭೇಟಿ

2 ಬೆತ್ಲೆಹೇಮಿನಲ್ಲಿ ಬೋವಜನೆಂಬ ಒಬ್ಬ ಐಶ್ವರ್ಯ
ವಂತನಿದ್ದನು. ಬೋವಜನು ಎಲೀಮೆಲೆಕನ
ಕುಟುಂಬದವನಾಗಿದ್ದು ನೊವೊಮಿಯ ಸಮೀಪದ
ಸಂಬಂಧಿಯಾಗಿದ್ದನು.
[2]ಒಂದು ದಿನ ರೂತಳು (ಮೋವಾಬ್ ದೇಶದವಳು)
ನೊವೊಮಿಗೆ, ‘‘ನಾನು ಹೊಲಗಳಿಗೆ ಹೋಗುತ್ತೇನೆ.
ಯಾರಾದರೂ ದಯೆತೋರಿ ತಮ್ಮ ಹೊಲದಲ್ಲಿ ಹಕ್ಕ
ಲನ್ನು ಆರಿಸಲು ಅನುಮತಿ ಕೊಡಬಹುದು’’ ಎಂದಳು.
[3]ನೊವೊಮಿಯು,‘‘ಆಗಲಿ ಮಗಳೇ, ಹಾಗೆಯೇ
ಮಾಡು’’ ಅಂದಳು.
ರೂತಳು ಹೊಲಗಳಿಗೆ ಹೋದಳು. ಅವಳು ಅಲ್ಲಿ
ಫಸಲು ಕೊಯ್ಯುವವರ ಹಿಂದೆ ಹೋಗಿ ಹಕ್ಕಲಾಯುತ್ತಾ
ಎಲೀಮೆಲೆಕನ ಕುಲದವನಾದ ಬೋವಜನ ಹೊಲಕ್ಕೆ
ಬಂದಳು.
[4]ತರುವಾಯ ಬೋವಜನು ಬೆತ್ಲೆಹೇಮಿನಿಂದ
ಹೊಲಕ್ಕೆ ಬಂದನು. ಅವನು ಕೆಲಸಗಾರರಿಗೆ,
‘‘ಯೆಹೋವನು ನಿಮ್ಮ ಸಂಗಡ ಇರಲಿ’’ ಎಂದು
ಹರಸಿದನು.
ಆ ಕೆಲಸಗಾರರು,‘‘ಯೆಹೋವನು ನಿನಗೆ ಕೃಪೆ
ತೋರಲಿ’’ ಎಂದು ಉತ್ತರಿಸಿದರು.
[5]ಆಗ ಬೋವಜನು ಕೊಯ್ಯುವವರ ಮೇಲ್ವಿಚಾರಕ
ನಾಗಿದ್ದ ತನ್ನ ಸೇವಕನನ್ನು, ‘‘ಆ ಸ್ತ್ರೀ ಯಾರು?’’ ಎಂದು
ಕೇಳಿದನು.
[6]ಆ ಸೇವಕನು, ‘‘ಅವಳು ಮೋವಾಬ್ ಬೆಟ್ಟಪ್ರದೇಶ
ದಿಂದ ನೊವೊಮಿಯ ಸಂಗಡ ಬಂದ ಮೋವಾಬ್ಯರ ಸ್ತ್ರೀ.
[7]ಅವಳು ಇಂದು ಬೆಳಗಿನ ಜಾವದಲ್ಲಿ ಬಂದು ಕೊಯ್ಯು
ವವರ ಹಿಂದೆ ಹೋಗಿ ಹಕ್ಕಲಾರಿಸಿಕೊಳ್ಳಬಹುದೇ?
ಎಂದು ನನ್ನನ್ನು ಕೇಳಿದಳು. ಆಗಿನಿಂದ ಅವಳು ಆ ಕೆಲಸ
ವನ್ನು ಮಾಡುತ್ತಿದ್ದಾಳೆ. ಆಕೆ ಸ್ವಲ್ಪ ಹೊತ್ತು ಮಾತ್ರ ಆ ಮನೆ
ಯಲ್ಲಿ ವಿಶ್ರಾಂತಿ ತೆಗೆದುಕೊಂಡಳು’’ ಎಂದು ಉತ್ತರ
ಕೊಟ್ಟನು.
[8]ಆಗ ಬೋವಜನು ರೂತಳಿಗೆ , ‘‘ಮಗಳೇ, ನೀನು
ನನ್ನ ಹೊಲದಲ್ಲಿಯೇ ಧಾನ್ಯವನ್ನು ಶೇಖರಿಸು. ನೀನು
ಬೇರೆಯವರ ಹೊಲಕ್ಕೆ ಹೋಗುವ ಅವಶ್ಯಕತೆಯಿಲ್ಲ.
ನನ್ನ ಹೆಣ್ಣಾಳುಗಳ ಹಿಂದೆಯೇ ನೀನು ಹೋಗುತ್ತಿರು.
[9]ಅವರು ಯಾವ ಹೊಲಕ್ಕೆ ಹೋಗುತ್ತಾರೆಂಬುದನ್ನು
ತಿಳಿದುಕೊಂಡು ಅವರನ್ನು ಹಿಂಬಾಲಿಸು; ನಿನಗೆ
ತೊಂದರೆ ಕೊಡಕೂಡದೆಂದು ನನ್ನ ಸೇವಕರಿಗೆ ಆಜ್ಞಾಪಿಸಿ
ದ್ದೇನೆ. ನಿನಗೆ ಬಾಯಾರಿಕೆಯಾದರೆ ನೀರಿನ ಕೊಡಗಳ
ಬಳಿಗೆ ಹೋಗಿ ನನ್ನ ಆಳುಗಳು ಸೇದುವ ನೀರನ್ನೇ ಕುಡಿ’’
ಎಂದು ಹೇಳಿದನು.
[10]ಆಗ ರೂತಳು ತಲೆಬಾಗಿ ವಂದಿಸಿದಳು. ಅವಳು
ಬೋವಜನಿಗೆ, ‘‘ನನಗೆ ಆಶ್ಚರ್ಯವಾಗುತ್ತದೆ. ನಾನೊಬ್ಬ
ಪರದೇಶಿಯಾಗಿದ್ದರೂ ನೀನು ನನ್ನನ್ನು ಗಮನಿಸಿ ಕೃಪೆ
ತೋರಿದೆ’’ ಎಂದಳು.
[11]ಬೋವಜನು ಅವಳಿಗೆ, ‘‘ನೀನು ನಿನ್ನ ಅತ್ತೆಯಾದ
ನೊವೊಮಿಗೆ ಮಾಡಿದ ಎಲ್ಲ ಸಹಾಯದ ಬಗ್ಗೆ ನನಗೆ

---

**ನೊವೊಮಿ** ಸುಖ ಅಥವಾ ಸಂತೋಷ ಎಂದರ್ಥ.

**ಮಾರಾ** ಕಹಿ, ದುಃಖಕರ ಎಂದರ್ಥ.

ಗೊತ್ತಿದೆ. ನಿನ್ನ ಗಂಡನು ಸತ್ತ ಮೇಲೆಯೂ ನೀನು ಅವಳಿಗೆ ಸಹಾಯ ಮಾಡಿದೆ ಎಂಬುದು ನನಗೆ ಗೊತ್ತಿದೆ. ನೀನು ನಿನ್ನ ತಂದೆತಾಯಿಗಳನ್ನೂ ನಿನ್ನ ದೇಶವನ್ನೂ ಬಿಟ್ಟು ಈ ದೇಶಕ್ಕೆ ಬಂದಿರುವಿ ಎಂಬುದು ನನಗೆ ಗೊತ್ತು. ನಿನಗೆ ಈ ದೇಶದಲ್ಲಿ ಯಾರ ಪರಿಚಯವೂ ಇರಲಿಲ್ಲ; ಆದರೂ ನೀನು ನೊವೊಮಿಯ ಜೊತೆ ಇಲ್ಲಿಗೆ ಬಂದಿರುವಿ.
[12]ನೀನು ಮಾಡಿದ ಎಲ್ಲ ಸತ್ಕಾರ್ಯಕ್ಕೆ ಯೆಹೋವನು ನಿನಗೆ ಸಂಪೂರ್ಣ ಪ್ರತಿಫಲ ಕೊಡುವನು; ಯಾಕಂದರೆ ನೀನು ಯಾವಾತನ ಆಶ್ರಯವನ್ನು* ಕೋರಿ ಬಂದಿರುವಿಯೊ ಆತನು ನಿನ್ನನ್ನು ರಕ್ಷಿಸುತ್ತಾನೆ'' ಎಂದು ಸಮಾಧಾನ ಪಡಿಸಿದನು.

[13]ಆಗ ರೂತಳು, ''ನನ್ನ ಸ್ವಾಮೀ, ನೀವು ನನಗೆ ತುಂಬ ದಯೆತೋರಿದಿರಿ. ನಾನು ಕೇವಲ ಒಬ್ಬ ದಾಸಿ. ನಾನು ನಿಮ್ಮ ಒಬ್ಬ ದಾಸಿಯ ಸಮಾನಳಲ್ಲದಿದ್ದರೂ ನೀವು ಒಳ್ಳೆಯ ಮಾತುಗಳಿಂದ ನನಗೆ ಕನಿಕರ ತೋರಿದಿರಿ'' ಎಂದು ತನ್ನ ಕೃತಜ್ಞತೆಯನ್ನು ಸೂಚಿಸಿದಳು.

[14]ಊಟದ ಸಮಯದಲ್ಲಿ ಬೋವಜನು ರೂತಳಿಗೆ, ''ಇಲ್ಲಿ ಬಾ, ರೊಟ್ಟಿಯನ್ನು ತೆಗೆದುಕೊಂಡು ಹುಳಿರಸದಲ್ಲಿ ಅದ್ದಿಕೊಂಡು ತಿನ್ನು'' ಎಂದು ಹೇಳಿದನು.

ರೂತಳು ಕೆಲಸಗಾರರ ಜೊತೆ ಕುಳಿತುಕೊಂಡಳು. ಬೋವಜನು ಆಕೆಗೆ ಸುಟ್ಟತೆನೆಗಳನ್ನು ಕೊಟ್ಟನು. ರೂತಳು ಹೊಟ್ಟೆತುಂಬ ಊಟ ಮಾಡಿದ ಮೇಲೂ ಸ್ವಲ್ಪ ಆಹಾರ ಉಳಿಯಿತು.
[15]ಆಗ ರೂತಳು ಎದ್ದು ಪುನಃ ಕೆಲಸಕ್ಕೆ ಹೋದಳು.

ಆಗ ಬೋವಜನು ತನ್ನ ಸೇವಕರಿಗೆ, ''ರೂತಳು ಕಣದಲ್ಲಿರುವ ಸಿವುಡುಗಳ ಸುತ್ತಲೂ ಹಕ್ಕಲು ಆರಿಸಿಕೊಳ್ಳಲಿ; ಅವಳನ್ನು ತಡೆಯಬೇಡಿ.
[16]ಅವಳಿಗಾಗಿ ಕಟ್ಟುಗಳಿಂದ ಕೆಲವು ತುಂಬುತೆನೆಗಳನ್ನೇ ಬಿಟ್ಟು ಅವಳ ಕೆಲಸ ಸುಲಭಗೊಳಿಸಿರಿ. ಆ ಧಾನ್ಯವನ್ನು ತೆಗೆದುಕೊಂಡರೆ ಅವಳನ್ನು ಗದರಿಸಬೇಡಿ'' ಎಂದು ಆಜ್ಞಾಪಿಸಿದನು.

## ನೊವೊಮಿಗೆ ಬೋವಜನ ವಿಷಯ ತಿಳಿಯಿತು

[17]ರೂತಳು ಸಾಯಂಕಾಲದವರೆಗೆ ಹೊಲದಲ್ಲಿ ಕೆಲಸ ಮಾಡಿದಳು. ಸಾಯಂಕಾಲ ತೆನೆಗಳನ್ನು ಬಡಿದು ಕಾಳನ್ನು ಹೊಟ್ಟಿನಿಂದ ಬೇರ್ಪಡಿಸಿದಳು. ಸುಮಾರು ಮೂವತ್ತು ಸೇರು* ಜವೆಗೋಧಿ ಸಿಕ್ಕಿತ್ತು.
[18]ರೂತಳು ತನ್ನ ಅತ್ತೆಗೆ ತೋರಿಸುವುದಕ್ಕಾಗಿ ಆ ಧಾನ್ಯವನ್ನು ಪಟ್ಟಣಕ್ಕೆ ತೆಗೆದುಕೊಂಡು ಹೋದಳು. ಇದಲ್ಲದೆ ತಾನು ಮಧ್ಯಾಹ್ನ ಊಟ ಮಾಡುವಾಗ ತೆಗೆದಿಟ್ಟ ಆಹಾರವನ್ನು ಸಹ ಅವಳಿಗೆ ಕೊಟ್ಟಳು.

[19]ಅವಳ ಅತ್ತೆಯು ಅವಳಿಗೆ, ''ಈ ಧಾನ್ಯವನ್ನೆಲ್ಲಾ ನೀನು ಎಲ್ಲಿಂದ ಶೇಖರಿಸಿದೆ? ನೀನು ಎಲ್ಲಿ ಕೆಲಸ ಮಾಡಿದೆ? ನಿನಗೆ ಸಹಾಯ ಮಾಡಿದ ಮನುಷ್ಯನಿಗೆ ಶುಭವಾಗಲಿ'' ಎಂದಳು.

ಅದಕ್ಕೆ ರೂತಳು, ''ನಾನು ಇಂದು ಯಾರ ಹತ್ತಿರ ಕೆಲಸ ಮಾಡಿದೆನೋ ಆ ಮನುಷ್ಯನ ಹೆಸರು ಬೋವಜ'' ಎಂದು ಹೇಳಿದಳು.

ನೊವೊಮಿಯು ತನ್ನ ಸೊಸೆಗೆ, ''ಯೆಹೋವನು ಅವನಿಗೆ ಕೃಪೆ ತೋರಲಿ. ಯೆಹೋವನು ಸತ್ತು ಹೋದವರಿಗೂ ಬದುಕಿರುವವರಿಗೂ ದಯೆತೋರಿಸುತ್ತಾನೆ'' ಎಂದು ಹೇಳಿದಳು.
[20]ಆಮೇಲೆ ನೊವೊಮಿಯು ತನ್ನ ಸೊಸೆಗೆ, ''ಬೋವಜನು ನಮ್ಮ ಸಂಬಂಧಿಗಳಲ್ಲೊಬ್ಬ ನಲ್ಲದೆ ನಮ್ಮ ಸಮೀಪದ ಬಂಧುವು ಆಗಿದ್ದಾನೆ, ನಮ್ಮ ಸಂರಕ್ಷಕನಾಗಿದ್ದಾನೆ'' ಎಂದು ತಿಳಿಸಿದಳು.

[21]ಅದಕ್ಕೆ ರೂತಳು, ''ಸುಗ್ಗಿಕಾಲ ಮುಗಿಯುವವರೆಗೂ ತನ್ನ ಹೆಣ್ಣಾಳುಗಳ ಜೊತೆಯಲ್ಲಿಯೇ ಹೋಗಬೇಕೆಂದು ಬೋವಜನು ನನಗೆ ಹೇಳಿದ್ದಾನೆ'' ಎಂದು ಹೇಳಿದಳು.

[22]ಆಗ ನೊವೊಮಿಯು ತನ್ನ ಸೊಸೆಯಾದ ರೂತಳಿಗೆ, ''ನೀನು ಅವನ ಹೆಣ್ಣಾಳುಗಳ ಜೊತೆಯಲ್ಲಿ ಹೋಗುವುದೇ ಒಳ್ಳೆಯದು. ನೀನು ಬೇರೆ ಹೊಲಕ್ಕೆ ಹೋದರೆ ನಿನಗೆ ತೊಂದರೆಯಾಗಬಹುದು'' ಎಂದಳು.
[23]ರೂತಳು ಬೋವಜನ ಹೆಣ್ಣಾಳುಗಳ ಜೊತೆಯಲ್ಲಿದ್ದುಕೊಂಡು ಗೋಧಿಯ ಮತ್ತು ಜವೆಗೋಧಿಯ ಸುಗ್ಗಿಕಾಲ ಮುಗಿಯುವವರೆಗೂ ಹಕ್ಕಲಾಯುತ್ತಿದ್ದಳು. ರೂತಳು ತನ್ನ ಅತ್ತೆಯಾದ ನೊವೊಮಿಯ ಸಂಗಡ ಮನೆಯಲ್ಲಿದ್ದಳು.

## ಕಣ

3 ರೂತಳ ಅತ್ತೆಯಾದ ನೊವೊಮಿಯು ಅವಳಿಗೆ, ''ನನ್ನ ಮಗಳೇ, ನೀನು ಮದುವೆಮಾಡಿಕೊಂಡು ಕುಟುಂಬಸ್ಥಳಾಗಿರುವುದು ಎಷ್ಟೋ ಒಳ್ಳೆಯದು.
[2]ಬೋವಜನು ನಮ್ಮ ಸಂಬಂಧಿಕನಾಗಿದ್ದಾನೆ. ನೀನು ಅವನ ಹೆಣ್ಣಾಳುಗಳ ಜೊತೆಯಲ್ಲಿದ್ದುಕೊಂಡು ಹಕ್ಕಲಾಯ್ದಿರುವೆ. ಇಂದು ರಾತ್ರಿ ಅವನು ಕಣದಲ್ಲಿ ಗೋಧಿಯನ್ನು ತೂರುವನು.
[3]ನೀನು ಸ್ನಾನ ಮಾಡಿ ಶೃಂಗರಿಸಿಕೊಂಡು ಶ್ರೇಷ್ಠವಾದ ಉಡುಪುಗಳನ್ನು ಧರಿಸಿಕೊಂಡು ಕಣಕ್ಕೆ ಹೋಗು. ಆದರೆ ಅವನು ಅನ್ನಪಾನಗಳನ್ನು ತೆಗೆದುಕೊಳ್ಳುವವರೆಗೆ ಅವನಿಗೆ ಮರೆಯಾಗಿರು.
[4]ಊಟವಾದ ಮೇಲೆ ವಿಶ್ರಾಂತಿ ತೆಗೆದುಕೊಳ್ಳುವುದಕ್ಕಾಗಿ ಅವನು ಮಲಗುತ್ತಾನೆ. ಅವನು ಎಲ್ಲಿ ಮಲಗುತ್ತಾನೆಂಬುದನ್ನು ನೋಡಿಕೊಂಡಿದ್ದು ಅಲ್ಲಿಗೆ ಹೋಗಿ ಅವನ ಪಾದಗಳ ಮೇಲಿನ ಹೊದಿಕೆಯನ್ನು ತೆಗೆದು ಅಲ್ಲಿಯೇ ಮಲಗಿಕೋ. ನೀನು ಮಾಡತಕ್ಕದ್ದನ್ನು ಅವನು ನಿನಗೆ ತಿಳಿಸುತ್ತಾನೆ'' ಎಂದಳು.

---

**ಆಶ್ರಯ** ಅಕ್ಷರಶಃ ಆತನ ರೆಕ್ಕೆಗಳ ಮರೆಯನ್ನು.

**ಮೂವತ್ತು ಸೇರು** ಅಕ್ಷರಶಃ ಒಂದು ಏಫಾ.

5ಆಗ ರೂತಳು, ‘‘ನೀನು ಹೇಳಿದಂತೆಯೇ ಮಾಡು
ತ್ತೇನೆ’’ ಎಂದು ಉತ್ತರ ಕೊಟ್ಟಳು.

6ರೂತಳು ಕಣಕ್ಕೆ ಹೋದಳು. ಅತ್ತೆಯು ಹೇಳಿ
ದಂತೆಯೇ ರೂತಳು ಮಾಡಿದಳು. 7ಅನ್ನಪಾನಗಳನ್ನು
ತೆಗೆದುಕೊಂಡು ಸಂತೃಪ್ತನಾಗಿದ್ದ ಬೋವಜನು ಧಾನ್ಯದ
ರಾಶಿಯ ಹತ್ತಿರ ಮಲಗಲು ಹೋದನು. ಆಗ ರೂತಳು
ರಹಸ್ಯವಾಗಿ ಬಂದು ಅವನ ಪಾದಗಳ ಮೇಲಿನ ಹೊದಿಕೆ
ಯನ್ನು ತೆಗೆದು ಅವನ ಪಾದಗಳ ಬಳಿಯಲ್ಲಿಯೇ
ಮಲಗಿದಳು. 8ಮಧ್ಯರಾತ್ರಿಯ ಸುಮಾರಿನಲ್ಲಿ ಬೋವ
ಜನು ನಿದ್ರೆಯಲ್ಲಿ ಹೊರಳಾಡಿ ಎಚ್ಚೆತ್ತನು. ಒಬ್ಬ ಸ್ತ್ರೀಯು
ತನ್ನ ಪಾದಗಳ ಬಳಿಯಲ್ಲಿ ಮಲಗಿರುವುದನ್ನು ಕಂಡು
ಅವನಿಗೆ ಬಹಳ ಆಶ್ಚರ್ಯವಾಯಿತು. 9‘‘ನೀನು
ಯಾರು?’’ ಎಂದು ಬೋವಜನು ಕೇಳಿದನು.

‘‘ನಾನು ನಿಮ್ಮ ದಾಸಿಯಾದ ರೂತಳು. ನೀನು ನನ್ನ
ಸಂರಕ್ಷಕ.* ನಿನ್ನ ಹೊದಿಕೆಯನ್ನು ನನ್ನ ಮೇಲೆ ಚಾಚು’’
ಎಂದು ಅವಳು ಬೇಡಿಕೊಂಡಳು.

10ಆಗ ಬೋವಜನು, ‘‘ಯುವತಿಯೇ, ಯೆಹೋವನು
ನಿನಗೆ ದಯೆತೋರಲಿ. ನೀನು ನನ್ನ ಮೇಲೆ ತುಂಬಾ
ಕರುಣೆಯನ್ನು ತೋರಿರುವೆ. ನೀನು ಮೊದಲು
ನೊವೊಮಿಗೆ ತೋರಿದ ಕರುಣೆಗಿಂತಲೂ ಹೆಚ್ಚಿನ ಕರುಣೆ
ಯನ್ನು ನನಗೆ ತೋರಿರುವೆ. ನೀನು ಒಬ್ಬ ತರುಣನನ್ನು
ಅವನು ಬಡವನಾಗಿರಲೀ ಅಥವಾ ಶ್ರೀಮಂತನಾಗಿರಲೀ
ಮದುವೆಗಾಗಿ ಆರಿಸಿಕೊಳ್ಳಬಹುದಾಗಿತ್ತು. ಆದರೆ ನೀನು
ಹಾಗೆ ಮಾಡಲಿಲ್ಲ. 11ತರುಣಿಯೇ, ಹೆದರಬೇಡ, ನಿನ್ನ
ಇಚ್ಛೆಯನ್ನು ನೆರವೇರಿಸುತ್ತೇನೆ. ನೀನು ಒಳ್ಳೆಯ ಸ್ತ್ರೀ
ಎಂಬುದನ್ನು ನಮ್ಮ ಪಟ್ಟಣದ ಎಲ್ಲರೂ ಬಲ್ಲರು.
12ನಾನು ಹತ್ತಿರದ ಸಂಬಂಧಿ ಎಂಬುದು ನಿಜ. ಆದರೆ
ನನಗಿಂತಲೂ ಹತ್ತಿರದ ಸಂಬಂಧಿ ಇನ್ನೊಬ್ಬನಿದ್ದಾನೆ.
13ಈ ರಾತ್ರಿ ಇಲ್ಲಿಯೇ ಇರು. ಆ ಮನುಷ್ಯನು ನಿನಗೆ
ಸಹಾಯ ಮಾಡುವನೋ ಎಂಬುದನ್ನು ನಾಳೆ ಬೆಳಿಗ್ಗೆ
ನೋಡೋಣ. ಅವನು ನಿನಗೆ ಸಹಾಯ ಮಾಡಲು
ಒಪ್ಪಿದರೆ ಒಳ್ಳೆಯದು. ಅವನು ನಿನಗೆ ಸಹಾಯ ಮಾಡಲು
ಒಪ್ಪದಿದ್ದರೆ ನಾನು ನಿನ್ನನ್ನು ಮದುವೆಯಾಗುತ್ತೇನೆ.
ಅಲ್ಲದೆ (ಎಲೀಮೆಲೆಕನ ಭೂಮಿಯನ್ನು ನಿನಗೋಸ್ಕರ
ಕೊಂಡುಕೊಳ್ಳುತ್ತೇನೆಂದು) ಯೆಹೋವನ ಆಣೆಯಾಗಿ
ಹೇಳುತ್ತೇನೆ. ಬೆಳಗಾಗುವವರೆಗೆ ಇಲ್ಲಿ ಮಲಗಿರು’’
ಎಂದು ಹೇಳಿದನು.

14ರೂತಳು ಬೆಳಗಿನ ಜಾವದವರೆಗೂ ಬೋವಜನ
ಪಾದಗಳ ಬಳಿಯಲ್ಲಿಯೇ ಮಲಗಿದ್ದು ಇನ್ನೂ ಕತ್ತಲಿರು
ವಾಗಲೇ ಎದ್ದಳು.

ಬೋವಜನು ಅವಳಿಗೆ, ‘‘ನೀನು ನಿನ್ನೆ ರಾತ್ರಿ ನನ್ನಲ್ಲಿಗೆ
ಬಂದಿದ್ದೆ ಎಂಬ ಸಂಗತಿಯು ರಹಸ್ಯವಾಗಿರಲಿ’’ ಎಂದು
ಹೇಳಿದನು. 15ಬೋವಜನು, ‘‘ನಿನ್ನ ಹೊದಿಕೆಯನ್ನು
ಇಲ್ಲಿ ತೆಗೆದುಕೊಂಡು ಬಾ. ಅದನ್ನು ಸ್ವಲ್ಪ ಅಗಲಮಾಡಿ
ಹಿಡಿದುಕೋ’’ ಎಂದನು.

ರೂತಳು ತನ್ನ ಹೊದಿಕೆಯನ್ನು ಅಗಲಮಾಡಿ ಹಿಡಿ
ದಳು. ಬೋವಜನು ಆರು ಸೇರಿನಷ್ಟು ಜವೆಗೋಧಿ
ಯನ್ನು ಅದರಲ್ಲಿ ಸುರಿದು ಚೆನ್ನಾಗಿ ಕಟ್ಟಿ ಅವಳ ಮೇಲೆ
ಹೊರಿಸಿದನು. ಬಳಿಕ ಆಕೆ ಊರೊಳಗೆ ಹೋದಳು.

16ರೂತಳು ತನ್ನ ಅತ್ತೆಯಾದ ನೊವೊಮಿಯ ಮನೆಗೆ
ಬಂದಳು. ನೊವೊಮಿಯು ಆಕೆಗೆ, ‘‘ನನ್ನ ಮಗಳೇ, ನಿನ್ನ
ಕಾರ್ಯವೇನಾಯಿತು?’’ ಎಂದು ಕೇಳಿದಳು.

ರೂತಳು ನಡೆದ ಸಂಗತಿಯನ್ನೂ ಬೋವಜನು ತನಗೆ
ಹೇಳಿದ್ದನ್ನೂ ಅತ್ತೆಗೆ ತಿಳಿಸಿದಳು. 17ಅಲ್ಲದೆ ‘‘ನೀನು
ಅತ್ತೆಯ ಬಳಿಗೆ ಬರಿಗೈಲಿ ಹೋಗಬಾರದೆಂದು ಆರು
ಸೇರು ಜವೆಗೋಧಿಯನ್ನು ಕೊಟ್ಟನು’’ ಎಂದು
ಹೇಳಿದಳು.

18ನೊವೊಮಿಯು, ‘‘ನನ್ನ ಮಗಳೇ, ಈ ಕಾರ್ಯದ
ಫಲಿತಾಂಶ ಗೊತ್ತಾಗುವವರೆಗೆ ತಾಳ್ಮೆಯಿಂದಿರು. ಈ
ಹೊತ್ತು ಅದನ್ನು ಇತ್ಯರ್ಥಪಡಿಸುವವರೆಗೆ ಅವನಿಗೆ ಸಮಾ
ಧಾನವಿರಲಾರದು’’ ಎಂದು ಹೇಳಿದಳು.

## ಬೋವಜ ಮತ್ತು ಮತ್ತೊಬ್ಬ ಸಂಬಂಧಿಕನು

4 ಬೋವಜನು ನಗರದ್ವಾರದ ಬಳಿಯಲ್ಲಿ ಕುಳಿತು
ಕೊಂಡನು. ಅವನ ಸಮೀಪಬಂಧುವು ಅಲ್ಲಿಂದ
ಹಾದುಹೋಗುವವರೆಗೆ ಅವನು ಅಲ್ಲಿಯೇ ಕುಳಿತಿದ್ದನು.
ಅವನನ್ನು ಕಂಡ ಬೋವಜನು, ‘‘ಸ್ನೇಹಿತನೇ ಇಲ್ಲಿ ಬಾ,
ಇಲ್ಲಿ ಕುಳಿತುಕೋ’’ ಎಂದು ಕರೆದನು.

2ಆಮೇಲೆ ಬೋವಜನು ನಗರದ ಹಿರಿಯರಲ್ಲಿ ಹತ್ತು
ಮಂದಿಯನ್ನು ಕರೆದು ಅವರಿಗೆ,‘‘ಇಲ್ಲಿ ಕುಳಿತುಕೊಳ್ಳಿ’’
ಎಂದು ಹೇಳಿದನು. ಅವರೂ ಕುಳಿತುಕೊಂಡರು.

3ಆಗ ಬೋವಜನು ಆ ಸಮೀಪಬಂಧುವಿನೊಡನೆ
ಮಾತಾಡಿ, ‘‘ನೊವೊಮಿಯು ಮೋವಾಬ್ ಬೆಟ್ಟ
ಪ್ರದೇಶದಿಂದ ಹಿಂದಿರುಗಿ ಬಂದಿದ್ದಾಳೆ. ಅವಳು ನಮ್ಮ
ಸಂಬಂಧಿಯಾದ ಎಲೀಮೆಲೆಕನ ಹೊಲವನ್ನು ಮಾರುತ್ತಿ
ದ್ದಾಳೆ. 4ನಾನು ಇದರ ಬಗ್ಗೆ ನಿನಗೆ ಈ ಜನರ ಸಮ್ಮುಖ
ದಲ್ಲಿ ಮತ್ತು ನಮ್ಮ ಹಿರಿಯರ ಸಮ್ಮುಖದಲ್ಲಿ ಹೇಳ
ಬೇಕೆಂದು ತೀರ್ಮಾನಿಸಿದ್ದೇನೆ. ನೀನು ಆ ಹೊಲವನ್ನು
ಕೊಂಡುಕೊಳ್ಳ ಬಯಸಿದರೆ ಕೊಂಡುಕೋ. ನಿನಗೆ
ಕೊಂಡುಕೊಳ್ಳಲು ಇಷ್ಟವಿಲ್ಲದಿದ್ದರೆ ನನಗೆ ಹೇಳು. ನಿನ್ನ
ಬಳಿಕ ಆ ಹೊಲವನ್ನು ಕೊಂಡುಕೊಳ್ಳುವ ಹಕ್ಕು ನನಗಿದೆ.
ನೀನು ಆ ಹೊಲವನ್ನು ಕೊಂಡುಕೊಳ್ಳದಿದ್ದರೆ ನಾನು

**ಸಂರಕ್ಷಕ** ಸತ್ತುಹೋದ ಸಂಬಂಧಿಕನ ಕುಟುಂಬದ ಬಗ್ಗೆ ಚಿಂತಿಸಿ ಸಂರಕ್ಷಿಸುವವನು. ಬಹುಮಟ್ಟಿಗೆ, ಈ ವ್ಯಕ್ತಿಯು ತನ್ನ ಬಡ ಸಂಬಂಧಿಕರನ್ನು ದಾಸತ್ವದಿಂದ ಬಿಡಿಸಿ ಕರೆದುಕೊಂಡು ಬರುತ್ತಿದ್ದನು.

ಕೊಂಡುಕೊಳ್ಳುತ್ತೇನೆ. ಆದಕ್ಕೆ ಅವನು, ‘‘ಸರಿ, ನಾನೇ
ಕೊಂಡುಕೊಳ್ಳುತ್ತೇನೆ. ’’ ಎಂದನು.
5ಆದಕ್ಕೆ ಬೋವಜನು,‘‘ನೀನು ನೊವೊಮಿಯಿಂದ ಆ
ಹೊಲವನ್ನು ಕೊಂಡುಕೊಂಡರೆ ಸತ್ತವನ ಹೆಂಡತಿಯೂ
ಮೋವಾಬ್ಯಳೂ ಆಗಿರುವ ರೂತಳನ್ನು ಸಹ ನೀನು
ಮದುವೆಯಾಗಬೇಕು . ರೂತಳಿಗೆ ಜನಿಸುವ ಮಗನು ಆ
ಹೊಲಕ್ಕೆ ಹಕ್ಕುದಾರನಾಗುವನು. ಹೀಗೆ ಈ ಭೂಮಿಯು
ಸತ್ತುಹೋದವನ ಕುಟುಂಬದಲ್ಲಿಯೇ ಇದ್ದು ಅವನ
ಹೆಸರಿನಲ್ಲಿಯೇ ಮುಂದುವರಿಯುವುದು’’ ಎಂದು
ಹೇಳಿದನು.
6ಆದಕ್ಕೆ ಆ ಸಮೀಪ ಬಂಧುವು ‘‘ನಾನು ಆ ಹೊಲವನ್ನು
ಕೊಂಡುಕೊಳ್ಳಲಾರೆ. ಆ ಹೊಲ ನನಗೆ ಸೇರಬೇಕಾದರೂ
ನಾನು ಅದನ್ನು ಕೊಂಡುಕೊಳ್ಳಲಾರೆ. ಒಂದು ವೇಳೆ
ನಾನು ಅದನ್ನು ಕೊಂಡುಕೊಂಡರೆ ನನ್ನ ಸ್ವಂತ ಹೊಲ
ವನ್ನೇ ಕಳೆದುಕೊಳ್ಳಬೇಕಾಗುವುದು. ಆದುದರಿಂದ
ನೀನೇ ಆ ಹೊಲವನ್ನು ಕೊಂಡುಕೊಳ್ಳಬಹುದು’’ ಎಂದು
ಉತ್ತರಿಸಿದನು. 7(ಇಸ್ರೇಲರಲ್ಲಿ ಪೂರ್ವಕಾಲದ ಪದ್ಧತಿ
ಯೇನಂದರೆ, ಯಾವುದಾದರೊಂದು ವಸ್ತುವನ್ನು
ಕೊಂಡುಕೊಳ್ಳುವಾಗಲೂ ತೆಗೆದುಕೊಳ್ಳುವಾಗಲೂ
ಮಾತನ್ನು ದೃಢಪಡಿಸುವುದಕ್ಕೋಸ್ಕರ ಒಬ್ಬನು ತನ್ನ
ಕೆರವನ್ನು ಮತ್ತೊಬ್ಬನಿಗೆ ಕೊಡುತ್ತಿದ್ದನು.) 8ಆದುದ
ರಿಂದ ಆ ಸಮೀಪ ಬಂಧುವು, ‘‘ನೀನೇ ಹೊಲವನ್ನು
ಕೊಂಡುಕೋ’’ ಎಂದು ಹೇಳಿ ತನ್ನ ಕೆರವನ್ನು ತೆಗೆದು
ಬೋವಜನಿಗೆ ಕೊಟ್ಟನು.
9ಆಗ ಬೋವಜನು ಹಿರಿಯರಿಗೂ ಎಲ್ಲಾ ಜನರಿಗೂ,
‘‘ನಾನು ಎಲೀಮೆಲೆಕ್, ಕಿಲ್ಯೋನ್, ಮಹ್ಲೋನ್
ಇವರೆಲ್ಲರ ಆಸ್ತಿಯನ್ನು ನೊವೊಮಿಯಿಂದ ಕೊಂಡು
ಕೊಳ್ಳುತ್ತಿದ್ದೇನೆ. ಇದಕ್ಕೆ ನೀವು ಸಾಕ್ಷಿಯಾಗಿದ್ದೀರಿ.
10ಮೋವಾಬ್ಯಳೂ ಮಹ್ಲೋನನ ಹೆಂಡತಿಯೂ ಆಗಿದ್ದ
ರೂತಳನ್ನು ನನ್ನ ಹೆಂಡತಿಯನ್ನಾಗಿ ತೆಗೆದುಕೊಳ್ಳುತ್ತೇನೆ.
ಸತ್ತುಹೋದ ಮನುಷ್ಯನ ಆಸ್ತಿಯು ಅವನ ಹೆಸರಿನಲ್ಲಿ
ಉಳಿಯಲೆಂದು ನಾನು ಹೀಗೆ ಮಾಡುತ್ತಿದ್ದೇನೆ. ಹೀಗೆ
ಮಾಡುವುದರಿಂದ ಸತ್ತವನ ಹೆಸರು ಅವನ ಕುಟುಂಬ
ದಲ್ಲಿಯೂ ಅವನ ಆಸ್ತಿಯಲ್ಲಿಯೂ ಉಳಿಯುವುದು.
ಇದಕ್ಕೆ ನೀವೇ ಸಾಕ್ಷಿಯಾಗಿದ್ದೀರಿ’’ ಎಂದು ನುಡಿದನು.

11ನಗರ ದ್ವಾರದಲ್ಲಿ ಸೇರಿದ್ದ ಜನರೆಲ್ಲರು ಮತ್ತು
ಹಿರಿಯರು

‘‘ಹೌದು ನಾವೇ ಸಾಕ್ಷಿಗಳಾಗಿದ್ದೇವೆ. ಈ ಸ್ತ್ರೀಯು
ನಿನ್ನ ಮನೆಗೆ ಬರುವಳು. ಯೆಹೋವನು ಅವಳನ್ನು
ರಾಹೇಲಳಂತೆಯೂ ಲೇಯಾಳಂತೆಯೂ
ಮಾಡಲಿ. ರಾಹೇಲಳೂ ಮತ್ತು ಲೇಯಾಳು
ಇಸ್ರೇಲಿನ ಮನೆಯನ್ನು ಕಟ್ಟಿದರು. ಎಫ್ರಾತಿನಲ್ಲಿ
ಪ್ರಭಾವಶಾಲಿಯಾಗು! ಬೆತ್ಲೆಹೇಮಿನಲ್ಲಿ ಸುಪ್ರಸಿ
ದ್ಧನಾಗು! ಎಂದು ನಾವು ಪ್ರಾರ್ಥಿಸುತ್ತೇವೆ.
12 ತಾಮಾರಳು ಯೆಹೂದನ ಮಗನಾದ ಪೆರೆಚನಿಗೆ
ಜನ್ಮಕೊಟ್ಟಳು. ಆದರಿಂದ ಅವನ ಕುಟುಂಬವು
ಅಭಿವೃದ್ಧಿ ಹೊಂದಿತು. ಹಾಗೆಯೇ ರೂತಳಿಂದ
ಯೆಹೋವನು ನಿನಗೆ ಹಲವಾರು ಮಕ್ಕಳನ್ನು
ಕೊಡಲಿ; ಅವನಂತೆಯೇ ನಿನ್ನ ಕುಟುಂಬವೂ ಅಭಿ
ವೃದ್ಧಿಹೊಂದಲಿ’’ ಎಂದು ಆಶೀರ್ವದಿಸಿದರು.

13ಬೋವಜನು ರೂತಳನ್ನು ಮದುವೆಯಾದನು.
ಯೆಹೋವನ ಕೃಪೆಯಿಂದ ರೂತಳು ಗರ್ಭವತಿಯಾಗಿ
ಗಂಡು ಮಗನಿಗೆ ಜನ್ಮಕೊಟ್ಟಳು. 14ನಗರದ ಸ್ತ್ರೀಯರು
ನೊವೊಮಿಗೆ,

‘‘ನಿನಗೆ ಈ ಬಾಧ್ಯಸ್ತನನ್ನು ದಯಪಾಲಿಸಿದ
ಯೆಹೋವನಿಗೆ ಸ್ತೋತ್ರವಾಗಲಿ. ಈ ಮಗು
ಇಸ್ರೇಲಿನಲ್ಲಿ ಸುಪ್ರಸಿದ್ಧನಾಗಲಿ.
15 ಅವನು ನಿನ್ನನ್ನು ಉಜ್ಜೀವಿಸಮಾಡುವನು. ವೃದ್ಧಾ
ಪ್ಯದಲ್ಲಿ ನಿನ್ನ ಸಂರಕ್ಷಕನಾಗಿರಲಿ. ನಿನ್ನನ್ನು
ಪ್ರೀತಿಸುವ ನಿನ್ನ ಸೊಸೆಯು ನಿನಗಾಗಿ ಈ ಮಗು
ವನ್ನು ಹೆತ್ತಿದ್ದಾಳೆ. ಅವಳು ನಿನಗೆ, ಏಳು ಮಂದಿ
ಗಂಡು ಮಕ್ಕಳಿಗಿಂತಲೂ ಶ್ರೇಷ್ಠವಾಗಿದ್ದಾಳೆ’’
ಎಂದು ಹೇಳಿದರು.

16ನೊವೊಮಿಯು ಆ ಮಗುವನ್ನು ತನ್ನ ಉಡಿಲಲ್ಲಿಟ್ಟು
ಕೊಂಡು ಸಾಕಿಸಲುಹಿದಳು. 17ನೆರೆಹೊರೆಯವರು
ಮಗುವಿಗೆ ಹೆಸರಿಟ್ಟರು. ಆ ಸ್ತ್ರೀಯರು, ‘‘ನೊವೊಮಿಗೆ
ಗಂಡುಮಗು ಹುಟ್ಟಿದೆ’’ ಎಂದರು. ನೆರೆಯವರು
ಓಬೇದನೆಂದು ಹೆಸರಿಟ್ಟರು. ಓಬೇದನು ಇಷಯನ
ತಂದೆ, ಇಷಯನು ರಾಜನಾದ ದಾವೀದನ ತಂದೆ.

## ರೂತ್ ಮತ್ತು ಬೋವಜನ ವಂಶವೃಕ್ಷ

18 ಪೆರೆಚನ ವಂಶಾವಳಿ ಹೀಗಿದೆ: ಪೆರೆಚನು
ಹೆಚ್ರೋನನ ತಂದೆ.
19 ಹೆಚ್ರೋನನು ರಾಮನ ತಂದೆ. ರಾಮನು
ಅಮ್ಮೀನಾದಾಬನ ತಂದೆ.
20 ಅಮ್ಮೀನಾದಾಬನು ನಹಶೋನನ ತಂದೆ.
ನಹಶೋನನು ಸಲ್ಮೋನನ ತಂದೆ.
21 ಸಲ್ಮೋನನು ಬೋವಜನ ತಂದೆ. ಬೋವಜನು
ಓಬೇದನ ತಂದೆ.
22 ಓಬೇದನು ಇಷಯನ ತಂದೆ. ಇಷಯನು
ದಾವೀದನ ತಂದೆ.

# 1 ಸಮುವೇಲನು

### ಶೀಲೋವಿನಲ್ಲಿ ಆರಾಧನೆ

1 ಎಲ್ಕಾನ ಎಂಬ ಒಬ್ಬ ಮನುಷ್ಯನಿದ್ದನು. ಅವನು
ಎಫ್ರಾಯೀಮ್ ಬೆಟ್ಟದ ಸೀಮೆಯ ರಾಮಾತ
ಯೀಮ್ ಎಂಬ ಊರಿನವನು. ಅವನು ಚೋಫೀಮ್
ಕುಟುಂಬದವನೂ ಯೆರೋಹಾಮನ ಮಗನೂ
ಆಗಿದ್ದನು. ಯೆರೋಹಾಮನು ಎಲೀಹುವಿನ ಮಗ.
ಎಲೀಹುವನು ತೋಹುವನ ಮಗ. ತೋಹುವನು
ಚೂಫನ ಮಗ. ಇವರೆಲ್ಲ ಎಫ್ರಾಯೀಮ್ ಕುಲದವರು.
[2]ಎಲ್ಕಾನನಿಗೆ ಇಬ್ಬರು ಹೆಂಡತಿಯರು. ಹನ್ನಳು
ಎಂಬುದು ಒಬ್ಬಳ ಹೆಸರಾದರೆ, ಇನ್ನೊಬ್ಬಳು ಪೆನಿನ್ನಳು.
ಪೆನಿನ್ನಳಿಗೆ ಮಕ್ಕಳಿದರು. ಆದರೆ ಹನ್ನಳಿಗೆ ಮಕ್ಕಳಿರಲಿಲ್ಲ.
[3]ಎಲ್ಕಾನನು ಪ್ರತಿ ವರ್ಷವು ತನ್ನ ಪಟ್ಟಣವಾದ ರಾಮಾತ
ವನ್ನು ಬಿಟ್ಟು ಶೀಲೋವಿಗೆ ಹೋಗುತ್ತಿದ್ದನು. ಅವನು
ಶೀಲೋವಿನಲ್ಲಿ ಸರ್ವಶಕ್ತನಾದ ಯೆಹೋವನನ್ನು
ಆರಾಧಿಸಿ ಆತನಿಗೆ ಯಜ್ಞವನ್ನು ಅರ್ಪಿಸುತ್ತಿದ್ದನು. ಹೊಫ್ನಿ
ಮತ್ತು ಫೀನೆಹಾಸರೆಂಬ ಯಾಜಕರು ಯೆಹೋವನ
ಸೇವೆಮಾಡುವ ಸ್ಥಳವೇ ಶೀಲೋವ. ಹೊಫ್ನಿ ಮತ್ತು
ಫೀನೆಹಾಸರು ಏಲಿಯನ ಮಕ್ಕಳು. [4]ಎಲ್ಕಾನನು ಪ್ರತಿಫಲ
ಯಜ್ಞವನ್ನು ಅರ್ಪಿಸುವಾಗ, ಪೆನಿನ್ನಳಿಗೆ ಯಜ್ಞದ ಒಂದು
ಭಾಗವನ್ನೂ ಅವಳ ಮಕ್ಕಳಿಗೆ ಒಂದು ಭಾಗವನ್ನೂ ಕೊಡು
ತ್ತಿದ್ದನು. [5]ಎಲ್ಕಾನನು ಹನ್ನಳಿಗೆ ಯಾವಾಗಲೂ ಎರಡು
ಭಾಗವನ್ನು ಕೊಡುತ್ತಿದ್ದನು. ಯೆಹೋವನು ಹನ್ನಳಿಗೆ
ಮಕ್ಕಳನ್ನು ಕೊಡದೇ ಇದ್ದರೂ, ಎಲ್ಕಾನನು ಎರಡು
ಭಾಗವನ್ನು ಕೊಡುತ್ತಿದ್ದನು. ಎಲ್ಕಾನನು ಹನ್ನಳನ್ನು
ಬಹಳವಾಗಿ ಪ್ರೀತಿಸುತಿದ್ದ ಕಾರಣ ಹೀಗೆ ಮಾಡುತ್ತಿದ್ದನು.

### ಪೆನಿನ್ನಳು ಹನ್ನಳನ್ನು ನೋಯಿಸುವಳು

[6]ಪೆನಿನ್ನಳು ಯಾವಾಗಲೂ ಹನ್ನಳನ್ನು ಕೆಣಕಿ ನೋವು
ಮಾಡುತ್ತಿದ್ದಳು. ಹನ್ನಳು ಬಂಜೆಯಾಗಿದ್ದುದೇ ಅದಕ್ಕೆ
ಕಾರಣ. [7]ಪ್ರತಿ ವರ್ಷವೂ ಶೀಲೋವಿನಲ್ಲಿದ್ದ
ಯೆಹೋವನ ಆಲಯಕ್ಕೆ ಅವರ ಕುಟುಂಬವು ಹೋದಾ
ಗಲೆಲ್ಲ ಪೆನಿನ್ನಳು ಹನ್ನಳನ್ನು ಕೆಣಕಿ ನೋವು ಮಾಡುತ್ತಿ
ದ್ದಳು. ಒಂದು ದಿನ ಎಲ್ಕಾನನು ಯಜ್ಞವನ್ನು ಅರ್ಪಿಸು
ವಾಗ, ಹನ್ನಳು ನೊಂದುಕೊಂಡು ಅಳಲಾರಂಭಿಸಿದಳು.
ಹನ್ನಳು ಊಟಮಾಡಲೇ ಇಲ್ಲ. [8]ಅವಳ ಗಂಡನಾದ
ಎಲ್ಕಾನನು ಅವಳನ್ನು ಕುರಿತು, ‘‘ಹನ್ನಾ, ಯಾಕೆ ಅಳು
ತ್ತಿರುವೆ? ಯಾಕೆ ಊಟಮಾಡುತ್ತಿಲ್ಲ? ಯಾಕೆ ವ್ಯಸನ
ದಿಂದಿರುವೆ? ನಿನಗೆ ನಾನಿಲ್ಲವೇ? ನಾನು ನಿನ್ನ ಗಂಡ.
ನಾನು ಹತ್ತು ಗಂಡು ಮಕ್ಕಳಿಗಿಂತಲೂ ಹೆಚ್ಚಾಗಿದ್ದೇ
ನಲ್ಲಾ’’ ಎಂದು ಹೇಳಿದನು.

### ಹನ್ನಳ ಪ್ರಾರ್ಥನೆ

[9]ಹನ್ನಳು ಅನ್ನಪಾನಗಳನ್ನು ತೆಗೆದುಕೊಂಡು ಸದ್ದಿಲ್ಲದೆ
ಮೇಲೆದ್ದು ಯೆಹೋವನಿಗೆ ಪ್ರಾರ್ಥಿಸಲು ಹೋದಳು.
ಯೆಹೋವನ ಪವಿತ್ರ ಆಲಯದ* ದ್ವಾರದ ಹತ್ತಿರ
ಯಾಜಕನಾದ ಏಲಿಯು ಕುಳಿತಿದ್ದನು. [10]ಹನ್ನಳು ಬಹು
ದುಃಖಿತಳಾಗಿದ್ದುದರಿಂದ ಕಣ್ಣೀರು ಸುರಿಯುತ್ತಿತ್ತು.
ಅವಳು ಯೆಹೋವನಿಗೆ ಪ್ರಾರ್ಥಿಸುತ್ತಿದ್ದಳು. [11]ಅವಳು
ದೇವರಲ್ಲಿ ಒಂದು ವಿಶೇಷ ವಾಗ್ದಾನವನ್ನು ಮಾಡಿದಳು.
ಅವಳು, ‘‘ಯೆಹೋವನೇ, ಸರ್ವಶಕ್ತನೇ,* ನಾನು ಎಷ್ಟು
ದುಃಖಿತಳೆಂಬುದನ್ನು ನೋಡು, ನನ್ನನ್ನು ಜ್ಞಾಪಿಸಿಕೊ!
ನನ್ನನ್ನು ಮರೆಯದಿರು. ನೀನು ನನಗೊಬ್ಬ ಮಗನನ್ನು
ಕರುಣಿಸಿದರೆ, ಅವನು ಜೀವದಿಂದಿರುವ ತನಕ ನಿನ್ನವ
ನಾಗಿರುವಂತೆ ನಿನಗೇ ಪ್ರತಿಷ್ಠಿಸುತ್ತೇನೆ. ಅವನು ನಾಜೀರ
ನಾಗಿರುವನು.* ಅವನು ದ್ರಾಕ್ಷಾರಸವನ್ನಾಗಲಿ ಇತರೆ
ಮದ್ಯವನ್ನಾಗಲಿ ಸೇವಿಸುವುದಿಲ್ಲ. ಅವನ ತಲೆಗೂದಲನ್ನು
ಕ್ಷೌರಕತ್ತಿಯಿಂದ ಕತ್ತರಿಸುವುದಿಲ್ಲ’’* ಎಂದು
ಹೇಳಿದಳು.

---

**ಪವಿತ್ರ ಆಲಯ** ಶೀಲೋವಿನಲ್ಲಿದ ಒಂದು ಪವಿತ್ರ ಗುಡಾರ. ಜನರು ಯೆಹೋವನನ್ನು ಆರಾಧಿಸುವುದಕ್ಕಾಗಿ ಇಲ್ಲಿಗೆ ಹೋಗುತ್ತಿದ್ದರು.

**ಸರ್ವಶಕ್ತ** ಅಕ್ಷರಶಃ ‘‘ನನ್ನ ಕೊಂಬು ಯೆಹೋವನಿಂದ ಮೇಲೆತ್ತಲ್ಪಟ್ಟಿದೆ.’’

**ನಾಜೀರ** ದೇವರೊಂದಿಗೆ ವಿಶೇಷ ವಾಗ್ದಾನ ಮಾಡಿದ ವ್ಯಕ್ತಿ. ಹೀಬ್ರೂ ಭಾಷೆಯ ಈ ಶಬ್ದದ ಅರ್ಥ ‘‘ಪ್ರತ್ಯೇಕಿಸಲ್ಪಟ್ಟವನು’’ ಎಂದು.

**ಕ್ಷೌರಕತ್ತಿಯಿಂದ ಕತ್ತರಿಸುವುದಿಲ್ಲ** ತಲೆಯ ಕೂದಲನ್ನು ಕತ್ತಿಯಿಂದ ಕತ್ತರಿಸುವುದಿಲ್ಲ ಮತ್ತು ದ್ರಾಕ್ಷಾರಸವನ್ನು ಕುಡಿಯುವುದಿಲ್ಲ ಎಂಬ ವಿಶೇಷ ವಾಗ್ದಾನ ಮಾಡುತ್ತಿದ್ದ ಜನರನ್ನು ನಾಜೀರರೆಂದು ಕರೆಯುತ್ತಿದ್ದರು. ಇವರು ದೇವರಿಗಾಗಿ ದೇಹ ತ್ಯಾಗವನ್ನೂ ಮಾಡುತ್ತಿದ್ದರು.

12ಹನ್ನಳು ಬಹಳ ಹೊತ್ತಿನವರೆಗೆ ಯೆಹೋವನಿಗೆ
ಪ್ರಾರ್ಥನೆ ಮಾಡಿದಳು. ಅವಳು ಪ್ರಾರ್ಥನೆ ಮಾಡುತ್ತಿ
ದ್ದಾಗ ಏಲಿಯು ಅವಳ ಬಾಯನ್ನೇ ನೋಡುತ್ತಿದ್ದನು.
13ಹನ್ನಳು ತನ್ನ ಹೃದಯದಲ್ಲಿಯೇ ಪ್ರಾರ್ಥಿಸುತ್ತಿದ್ದಳು.
ಅವಳ ತುಟಿಗಳು ಚಲಿಸಿದರೂ ಮಾತುಗಳು ಕೇಳಿಸಲಿಲ್ಲ.
ಅವಳು ಮದ್ಯಪಾನ ಮಾಡಿರುತ್ತಾಳೆಂದು 14ಏಲಿಯು
ನೆನಸಿ, ‘‘ನೀನು ಹೆಚ್ಚು ಕುಡಿದಿರುವೆ. ಅಮಲನ್ನು ಇಳಿಸಿ
ಕೊ’’ಎಂದು ಹನ್ನಳಿಗೆ ಹೇಳಿದನು.

15ಹನ್ನಳು, ‘‘ಸ್ವಾಮೀ, ನಾನು ಯಾವುದೇ ದ್ರಾಕ್ಷಾ
ರಸವನ್ನಾಗಲಿ ಮದ್ಯವನ್ನಾಗಲಿ ಕುಡಿದಿಲ್ಲ. ನಾನು ಬಹು
ದುಃಖಿತಳು. ನಾನು ಯೆಹೋವನಲ್ಲಿ ನನ್ನ ಎಲ್ಲ ತೊಂದರೆ
ಗಳನ್ನು ನಿವೇದಿಸಿಕೊಳ್ಳುತ್ತಿದ್ದೆನು. 16ನನ್ನನ್ನು ಅಯೋಗ್ಯ
ಹೆಂಗಸೆಂದು ನೆನಸಬೇಡಿ. ನಾನು ಬಹು ದುಃಖಿತಳಾಗಿರು
ವುದರಿಂದ ಮತ್ತು ಹೆಚ್ಚು ನೊಂದಿರುವುದರಿಂದ ದೀರ್ಘ
ಕಾಲ ಪ್ರಾರ್ಥನೆ ಮಾಡಿದೆ’’ ಎಂದು ಉತ್ತರಿಸಿದಳು.

17ಏಲಿಯು, ‘‘ಸಮಾಧಾನದಿಂದ ಹೋಗು. ಇಸ್ರೇಲಿನ
ದೇವರು ನಿನ್ನ ಇಷ್ಟಾರ್ಥಗಳನ್ನು ನೆರವೇರಿಸುತ್ತಾನೆ’’
ಎಂದು ಉತ್ತರಿಸಿದನು.

18ಹನ್ನಳು, ‘‘ನನ್ನ ಮೇಲೆ ನಿಮ್ಮ ದಯೆಯಿರಲಿ’’
ಎಂದು ಹೇಳಿದಳು. ಆಗ ಅವಳು ತನ್ನ ಮಾರ್ಗದಲ್ಲಿಯೇ
ಹಿಂದಿರುಗಿ, ಸ್ವಲ್ಪ ಊಟ ಮಾಡಿದಳು. ಅಂದಿನಿಂದ
ಅವಳು ದುಃಖಿತಳಾಗಲಿಲ್ಲ.

19ಎಲ್ಕಾನನ ಕುಟುಂಬದವರು ಮರುದಿನ ಬೆಳಿಗ್ಗೆ
ಎದ್ದು ಯೆಹೋವನನ್ನು ಆರಾಧಿಸಿ, ರಾಮದಲ್ಲಿದ್ದ ಮನೆಗೆ
ಹಿಂದಿರುಗಿದರು.

### ಸಮುವೇಲನ ಜನನ

ಎಲ್ಕಾನನು ಹನ್ನಳನ್ನು ಕೂಡಿದನು. ಯೆಹೋವನು
ಹನ್ನಳನ್ನು ಜ್ಞಾಪಿಸಿಕೊಂಡನು. 20ಹನ್ನಳು ಗರ್ಭಿಣಿಯಾಗಿ
ಮಗನನ್ನು ಹೆತ್ತಳು. ಹನ್ನಳು ಆ ಮಗನಿಗೆ ಸಮುವೇಲ
ನೆಂದು ಹೆಸರಿಟ್ಟಳು. ಅವಳು, ‘‘ಅವನ ಹೆಸರು
ಸಮುವೇಲ, ಏಕೆಂದರೆ ನಾನು ಅವನಿಗಾಗಿ ಯೆಹೋವ
ನಲ್ಲಿ ಪ್ರಾರ್ಥಿಸಿದ್ದೆ’’ ಎಂದಳು.

21ಎಲ್ಕಾನನು ಯಜ್ಞವನ್ನು ಅರ್ಪಿಸಲು ಮತ್ತು
ಯೆಹೋವನಿಗೆ ಮಾಡಿದ ಹರಕೆಯನ್ನು ಸಲ್ಲಿಸಲು ಆ
ವರ್ಷವೂ ಶೀಲೋವಿಗೆ ತನ್ನ ಕುಟುಂಬ ಸಮೇತವಾಗಿ
ಹೋದನು. 22ಆದರೆ ಹನ್ನಳು ಹೋಗಲಿಲ್ಲ. ಅವಳು
ಎಲ್ಕಾನನಿಗೆ, ‘‘ಮಗುವು ಗಟ್ಟಿಯಾದ ಊಟ ಮಾಡುವ
ತನಕ ನಾನು ಬರುವುದಿಲ್ಲ. ಅವನು ದೊಡ್ಡವನಾದ
ಮೇಲೆ ನಾನೇ ಶೀಲೋವಿಗೆ ಕರೆದೊಯ್ದು ಯೆಹೋವ
ನಿಗೆ ಒಪ್ಪಿಸುತ್ತೇನೆ. ಅವನು ನಾಜೀರನಾಗುತ್ತಾನೆ. ಅವನು
ಯಾವಾಗಲೂ ಶೀಲೋವಿನಲ್ಲಿಯೇ ಇರುತ್ತಾನೆ’’
ಎಂದು ಹೇಳಿದಳು.

23ಹನ್ನಳ ಗಂಡನಾದ ಎಲ್ಕಾನನು ಅವಳಿಗೆ, ‘‘ನಿನಗೆ
ಸರಿತೋರಿದಂತೆ ಮಾಡು. ಮಗುವು ಗಟ್ಟಿಯಾದ ಊಟ
ಮಾಡುವಷ್ಟು ವಯಸ್ಸಾಗುವ ತನಕ ಮನೆಯಲ್ಲಿಯೇ
ಇರು. ನೀನು ಹೇಳಿದ್ದನ್ನು ಯೆಹೋವನು ನೆರವೇರಿಸಲಿ’’
ಎಂದು ಹೇಳಿದನು. ಆದ್ದರಿಂದ ಹನ್ನಳು ತನ್ನ ಮಗುವು
ಗಟ್ಟಿಯಾದ ಆಹಾರವನ್ನು ತಿನ್ನಲು ಆರಂಭಿಸುವ ತನಕ
ಆರೈಕೆಮಾಡಿ ಬೆಳೆಸಲು ಮನೆಯಲ್ಲಿಯೇ ಇದ್ದಳು.

### ಸಮುವೇಲನನ್ನು ಯೆಹೋವನಿಗೆ ಒಪ್ಪಿಸಿದ್ದು

24ಮಗುವು ಗಟ್ಟಿಯಾದ ಊಟ ಮಾಡುವಂತಾದಾಗ
ಹನ್ನಳು ಶೀಲೋವಿನಲ್ಲಿದ್ದ ಯೆಹೋವನ ಆಲಯಕ್ಕೆ
ಅವನನ್ನು ಕರೆದುಕೊಂಡು ಹೋದಳು. ಹನ್ನಳು ಮೂರು
ವರ್ಷದ ಹೋರಿಯನ್ನೂ ಮೂವತ್ತು ಸೇರು ಹಿಟ್ಟನ್ನೂ
ಒಂದು ಸೀಸೆ ದ್ರಾಕ್ಷಾರಸವನ್ನೂ ತೆಗೆದುಕೊಂಡು
ಹೋದಳು.

25ಅವರೆಲ್ಲಾ ಯೆಹೋವನ ಸನ್ನಿಧಿಗೆ ಹೋದರು.
ಎಲ್ಕಾನನು ಎಂದಿನಂತೆ ಹೋರಿಯನ್ನು ಯಜ್ಞವಾಗಿ
ಅರ್ಪಿಸಿದನು. ಆಮೇಲೆ ಹನ್ನಳು ಏಲಿಯನ ಬಳಿಗೆ ಮಗ
ನನ್ನು ಕರೆದೊಯ್ದಳು. 26ಹನ್ನಳು, ‘‘ಸ್ವಾಮೀ, ನನ್ನನ್ನು
ಕ್ಷಮಿಸಿ. ನಿಮ್ಮ ಬಳಿ ನಿಂತಿರುವ ನಾನೇ ಅಂದು
ಯೆಹೋವನಿಗೆ ಪ್ರಾರ್ಥನೆ ಮಾಡಿದವಳು. ನಾನು ಹೇಳು
ತ್ತಿರುವುದು ನಿಜವೆಂದು ಪ್ರಮಾಣ ಮಾಡುತ್ತೇನೆ.
27ನಾನು ಈ ಮಗುವಿಗಾಗಿ ಪ್ರಾರ್ಥನೆ ಮಾಡಿದೆ.
ಯೆಹೋವನು ನನ್ನ ಪ್ರಾರ್ಥನೆಗೆ ಉತ್ತರಿಸಿದನು.
ಯೆಹೋವನು ಅನುಗ್ರಹಿಸಿದ ಮಗನೇ ಇವನು. 28ಈಗ
ನಾನು ಈ ಮಗನನ್ನು ಯೆಹೋವನಿಗೆ ಒಪ್ಪಿಸುತ್ತೇನೆ.
ಇವನು ಜೀವದಿಂದಿರುವ ತನಕ ಯೆಹೋವನಿಗೆ ಪ್ರತಿಷ್ಠಿ
ತನಾಗಿರುತ್ತಾನೆ’’ ಎಂದು ಏಲಿಗೆ ಹೇಳಿದಳು.

ಬಳಿಕ ಹನ್ನಳು ಆ ಬಾಲಕನನ್ನು ಅಲ್ಲಿಯೇ ಬಿಟ್ಟು
ಯೆಹೋವನನ್ನು ಆರಾಧಿಸಿದಳು.

### ಹನ್ನಳ ಸ್ತೋತ್ರ

2 ಹನ್ನಳು ಇಂತೆಂದಳು:
‘‘ನನ್ನ ಹೃದಯವು ಯೆಹೋವನಲ್ಲಿ ಉಲ್ಲಾಸಿ
ಸುತ್ತದೆ. ನಾನು ನನ್ನ ದೇವರಾದ ಯೆಹೋವನಲ್ಲಿ
ಬಲಶಾಲಿಯಾಗಿದ್ದೇನೆ. ನಾನು ನನ್ನ ಶತ್ರುಗಳ
ಬಗ್ಗೆ ನಗುವೆನು.* ನಾನು ನಿನ್ನ ರಕ್ಷಣೆಯಲ್ಲಿ
ಆನಂದಿಸುತ್ತೇನೆ.

2 ‘‘ಯೆಹೋವನಂತಹ ಪವಿತ್ರ ದೇವರು ಬೇರೆ
ಯಾರೂ ಇಲ್ಲ. ನಿನ್ನ ಹೊರತು ಅನ್ಯದೇವರಿಲ್ಲ!
ನಮ್ಮ ದೇವರಿಗಿಂತ ಬೇರೊಂದು ಬಂಡೆಯಿಲ್ಲ.

---

**ನಾನು … ನಗುವೆನು** ಅಕ್ಷರಶಃ ‘‘ನನ್ನ ಶತ್ರುಗಳ ಮುಂದೆ ನನ್ನ ಬಾಯಿ ತೆರೆದಿದೆ.’’

3 ಇನ್ನು ಮುಂದೆ ಬಡಾಯಿಕೊಚ್ಚಬೇಡಿ! ಸೊಕ್ಕಿನ
ಮಾತುಗಳನ್ನು ಆಡಬೇಡಿ! ಏಕೆಂದರೆ
ಯೆಹೋವನು ಪ್ರತಿಯೊಂದನ್ನು ಬಲ್ಲನು. ಆತನು
ಮನುಷ್ಯರನ್ನು ಮುನ್ನಡೆಸುತ್ತಾನೆ ಮತ್ತು ತೂಗಿ
ನೋಡುತ್ತಾನೆ.
4 ಶಕ್ತಿಶಾಲಿ ಯೋಧರ ಬಿಲ್ಲುಗಳು ಮುರಿದು
ಹೋಗುತ್ತವೆ. ಬಲಹೀನರು ಶಕ್ತಿವಂತ
ರಾಗುವರು.
5 ''ಹಿಂದೆ ಆಹಾರವನ್ನು ಸಮೃದ್ಧಿಕರವಾಗಿ ಹೊಂದಿದ್ದ
ಜನರು ಅನ್ನಕ್ಕಾಗಿ ದುಡಿಯಬೇಕಾಗುವುದು.
ಹಿಂದೆ ಆಹಾರಕ್ಕಾಗಿ ಹಸಿದಿದ್ದವರು ಇಂದು ತಿಂದು
ಕೊಬ್ಬಿರುವರು! ಬಂಜೆಗೆ ಈಗ ಏಳು ಜನ ಮಕ್ಕಳಿ
ರುವರು. ಆದರೆ ಹೆಚ್ಚು ಮಕ್ಕಳಿದ್ದ ತಾಯಿ ಇಂದು
ವೇದನೆಗೊಂಡಿರುವಳು ಏಕೆಂದರೆ ಅವಳ
ಮಕ್ಕಳೆಲ್ಲ ಸತ್ತು ಹೋಗಿದ್ದಾರೆ.
6 ಯೆಹೋವನು ಜನರಿಗೆ ಸಾವನ್ನೂ ತರುವನು.
ಅಂತೆಯೇ ಅವರಿಗೆ ಜೀವವನ್ನೂ ದಯಪಾಲಿಸು
ವನು. ಆತನು ಅವರಿಗೆ ಮರುಜೀವವನ್ನು ದಯ
ಪಾಲಿಸಬಲ್ಲನು. ಯೆಹೋವನು ಜನರನ್ನು ಮರಣ
ಸ್ಥಳವಾದ ಪಾತಾಳಕ್ಕೆ ತಳ್ಳುವನು.
7 ಯೆಹೋವನು ಜನರನ್ನು ಬಡವರನ್ನಾಗಿಸುತ್ತಾನೆ.
ಆತನು ಜನರನ್ನು ಹಣವಂತರನ್ನಾಗಿಸುತ್ತಾನೆ.
ಯೆಹೋವನು ಜನರನ್ನು ದೀನರನ್ನಾಗಿಸುತ್ತಾನೆ.
ಆತನು ಜನರನ್ನು ದೊಡ್ಡವರನ್ನಾಗಿಸುತ್ತಾನೆ.
8 ಯೆಹೋವನು ಬಡವರನ್ನು ಧೂಳಿನಿಂದ ಮೇಲಕ್ಕೆ
ತ್ತುತ್ತಾನೆ. ಯೆಹೋವನು ದೀನರನ್ನು ಬೂದಿ
ಯಿಂದ ಮೇಲಕ್ಕೆತ್ತುತ್ತಾನೆ. ಯೆಹೋವನು ಬಡವ
ರನ್ನು ರಾಜಕುಮಾರರೊಂದಿಗೆ ಕುಳ್ಳಿರಿಸುತ್ತಾನೆ.
ಯೆಹೋವನು ಬಡವರನ್ನು ಗೌರವಪೀಠದಲ್ಲೂ
ಕುಳ್ಳಿರಿಸುತ್ತಾನೆ. ಲೋಕವೂ ಅದರ ಅಡಿಪಾಯ
ಗಳೂ ಪ್ರಭುವಿನವು. ಯೆಹೋವನು ಆ ಕಂಬಗಳ
ಮೇಲೆ ಲೋಕವನ್ನು ನಿಲ್ಲಿಸಿರುವನು.
9 ಯೆಹೋವನು ತನ್ನ ಪವಿತ್ರ ಜನರನ್ನು ರಕ್ಷಿಸುವನು.
ಆತನು ಅವರನ್ನು ಎಡವದಂತೆ ಕಾಪಾಡುವನು.
ಆದರೆ ಕೆಟ್ಟವರು ನಾಶವಾಗಿ ಕತ್ತಲೆಯಲ್ಲಿ ಬೀಳು
ವರು. ಅವರ ಶಕ್ತಿ ಅವರಿಗೆ ಜಯನೀಡಲಾರದು.
10 ಯೆಹೋವನು ತನ್ನ ಶತ್ರುಗಳನ್ನು ನಾಶಗೊಳಿಸು
ವನು. ಮಹೋನ್ನತನಾದ ದೇವರು ಪರಲೋಕ
ದಲ್ಲಿ ಜನರಿಗೆ ವಿರುದ್ಧವಾಗಿ ಗುಡುಗುವನು.
ಯೆಹೋವನು ಬಹುದೂರದ ದೇಶಗಳಿಗೂ
ತೀರ್ಪನ್ನು ಕೊಡುವನು. ಯೆಹೋವನು ತನ್ನ
ರಾಜನಿಗೆ ಶಕ್ತಿಯನ್ನೀಯುವನು. ತಾನು ಅಭಿಷೇ
ಕಿಸಿದ ರಾಜನನ್ನು ಬಲಗೊಳಿಸುವನು.''

11ಎಲ್ಕಾನ ಮತ್ತು ಅವನ ಕುಟುಂಬದವರು ರಾಮ
ದಲ್ಲಿದ್ದ ಮನೆಗೆ ಹಿಂದಿರುಗಿದರು. ಬಾಲಕನು ಶೀಲೋವಿ
ನಲ್ಲಿಯೇ ಉಳಿದುಕೊಂಡನು ಮತ್ತು ಯಾಜಕನಾದ
ಏಲಿಯ ಮಾರ್ಗದರ್ಶನದಲ್ಲಿ ಯೆಹೋವನ ಸೇವೆ
ಮಾಡಿದನು.

## ಏಲಿಯ ದುಷ್ಟ ಮಕ್ಕಳು

12ಏಲಿಯ ಮಕ್ಕಳು ದುಷ್ಟರಾಗಿದ್ದರು. ಅವರು
ಯೆಹೋವನನ್ನು ಲಕ್ಷಿಸುತ್ತಿರಲಿಲ್ಲ. 13ಯಾಜಕರು
ಜನರೊಡನೆ ಯಾವ ರೀತಿ ವರ್ತಿಸಬೇಕು ಎಂಬುದನ್ನು
ಅವರು ಲಕ್ಷಿಸುತ್ತಿರಲಿಲ್ಲ. ಯಾಜಕರು ಜನರಿಗಾಗಿ
ಮಾಡಬೇಕಾದ ಕಾರ್ಯವೆಂದರೆ: ಒಬ್ಬ ವ್ಯಕ್ತಿಯು
ಪ್ರತಿಸಲ ಯಜ್ಞವನ್ನರ್ಪಿಸಲು ಬಂದಾಗ ಯಾಜಕರು
ಯಜ್ಞಮಾಂಸವನ್ನು ಒಂದು ಮಡಕೆಯಲ್ಲಿ ಬೇಯಿಸ
ಬೇಕು. ಯಾಜಕರ ಸೇವಕನು ಕೈಯಲ್ಲಿ ತ್ರಿಶೂಲವನ್ನು
ಹಿಡಿದುಕೊಂಡು ಬರಬೇಕು. 14ಯಾಜಕರ ಸೇವಕನು
ತ್ರಿಶೂಲವನ್ನು ಮಡಕೆಯಲ್ಲಾಗಲೀ ತಪ್ಪಲೆಯಲ್ಲಾಗಲೀ
ಚುಚ್ಚಿ ಹೊರ ತೆಗೆದಾಗ, ಅದರೊಂದಿಗೆ ಬರುವ ಮಾಂಸ
ವನ್ನು ಮಾತ್ರ ಯಾಜಕನು ಸ್ವೀಕರಿಸಬೇಕು. ಶೀಲೋವಿಗೆ
ಯಜ್ಞವನ್ನರ್ಪಿಸಲು ಬರುವ ಎಲ್ಲ ಇಸ್ರೇಲರೊಂದಿಗೆ
ಇದೇ ರೀತಿ ಮಾಡಬೇಕಿತ್ತು.
15ಆದರೆ ಏಲಿಯ ಮಕ್ಕಳು ಈ ರೀತಿ ಮಾಡುತ್ತಿರಲಿಲ್ಲ.
ಯಜ್ಞವೇದಿಕೆಯ ಮೇಲೆ ಕೊಬ್ಬನ್ನು ಹೋಮ ಮಾಡು
ವುದಕ್ಕಿಂತ* ಮೊದಲೆ ಅವರ ಸೇವಕರು ಯಜ್ಞಗಳನ್ನು
ಅರ್ಪಿಸುವ ಜನರ ಬಳಿಗೆ ಹೋಗುತ್ತಿದ್ದರು. ಯಾಜಕನ
ಸೇವಕನು, ''ಯಾಜಕನಿಗೆ ಕರಿದು ಕೊಡಲು ಸ್ವಲ್ಪ
ಮಾಂಸವನ್ನು ಕೊಡಿ. ಬೇಯಿಸಿದ ಮಾಂಸವನ್ನು
ಯಾಜಕನು ನಿಮ್ಮಿಂದ ಸ್ವೀಕರಿಸಿಕೊಳ್ಳುವುದಿಲ್ಲ'' ಎಂದು
ಹೇಳುತ್ತಿದ್ದನು.
16ಯಜ್ಞವನ್ನರ್ಪಿಸುವವನು, ''ಕೊಬ್ಬನ್ನು ಮೊದಲು
ಹೋಮಮಾಡೋಣ. ಅನಂತರ ನಿಮಗೆ ಬೇಕಾ
ದುದನ್ನು ತೆಗೆದುಕೊಳ್ಳಿ'' ಎಂದು ಹೇಳಿದರೆ, ಯಾಜಕರ
ಸೇವಕನು, ''ಇಲ್ಲ, ಯಾಜಕನಿಗಾಗಿ ಕರಿಯಲು ಮಾಂಸ
ವನ್ನು ಈಗಲೇ ಕೊಡು. ನೀನು ಕೊಡುವುದಿಲ್ಲವಾದರೆ,
ನಾನೇ ತೆಗೆದುಕೊಳ್ಳುತ್ತೇನೆ'' ಎಂದು ಹೇಳುತ್ತಿದ್ದನು.
17ಯೆಹೋವನಿಗೆ ಅರ್ಪಿಸುವ ಯಜ್ಞವನ್ನು ಹೊಫ್ನಿ
ಮತ್ತು ಫೀನೆಹಾಸರು ತುಚ್ಛೀಕರಿಸುತ್ತಿದ್ದರು. ಇದು
ಯೆಹೋವನಿಗೆ ವಿರೋಧವಾದ ಮಹಾಪಾಪವಾಗಿತ್ತು.
18ಆದರೆ ಬಾಲಕನಾದ ಸಮುವೇಲನು ಏಫೋದ್*
ಎಂಬ ನಾರುಬಟ್ಟೆಯನ್ನು ಧರಿಸಿ ಯೆಹೋವನ ಸೇವೆ

---

**ಕೊಬ್ಬನ್ನು ಹೋಮಮಾಡು** ಪ್ರಾಣಿ ದೇಹದ ಒಂದು ಭಾಗವಾದ ಕೊಬ್ಬು ದೇವರಿಗೆ ಮಾತ್ರ ಸೇರಿದ್ದು. ಯಾಜಕರು ದೇವರಿಗೆ ಕಾಣಿಕೆಯಾಗಿ ಈ ಕೊಬ್ಬನ್ನು ಯಜ್ಞವೇದಿಕೆಯ ಮೇಲೆ ಸುಡುತ್ತಿದ್ದರು.

**ಏಫೋದ್** ಯಾಜಕರು ಧರಿಸುತ್ತಿದ್ದ ವಿಶೇಷವಾದ ಮೇಲಂಗಿ.

ಮಾಡುತ್ತಿದ್ದನು. [19]ಸಮುವೇಲನ ತಾಯಿಯು ಪ್ರತಿ ವರ್ಷವೂ ಒಂದು ಚಿಕ್ಕ ಮೇಲಂಗಿಯನ್ನು ಅವನಿಗಾಗಿ ತಯಾರಿಸಿ, ಗಂಡನೊಡನೆ ವಾರ್ಷಿಕ ಯಜ್ಞವನ್ನು ಅರ್ಪಿಸಲು ಶೀಲೋವಿಗೆ ಹೋದಾಗ ಅವನಿಗೆ ಕೊಡುತ್ತಿದ್ದಳು.

[20]ಏಲಿಯು ಎಲ್ಕಾನನನ್ನು ಮತ್ತು ಅವನ ಹೆಂಡತಿಯಾದ ಹನ್ನಳನ್ನು ಆಶೀರ್ವದಿಸಿ, ‘‘ಹನ್ನಳು ಯೆಹೋವನನ್ನು ಪ್ರಾರ್ಥಿಸಿ ಪಡೆದ ಮಗನನ್ನು ಆತನಿಗೆ ಒಪ್ಪಿಸಿದ್ದರಿಂದ ಯೆಹೋವನು ಅವಳಿಗೆ ಬೇರೆ ಮಕ್ಕಳನ್ನು ಅನುಗ್ರಹಿಸಲಿ’’ಎಂದು ಹೇಳಿದನು.

ಆಮೇಲೆ ಎಲ್ಕಾನ ಮತ್ತು ಹನ್ನ ಮನೆಗೆ ಹೋದರು. [21]ಯೆಹೋವನು ಹನ್ನಳಿಗೆ ದಯೆತೋರಿದನು. ಅವಳಿಗೆ ಮೂರು ಮಂದಿ ಗಂಡುಮಕ್ಕಳೂ ಇಬ್ಬರು ಹೆಣ್ಣು ಮಕ್ಕಳೂ ಆದರು. ಬಾಲಕನಾದ ಸಮುವೇಲನು ಯೆಹೋವನ ಸನ್ನಿಧಿಯಲ್ಲಿ ದೊಡ್ಡವನಾದನು.

## ಏಲಿಯು ತನ್ನ ದುಷ್ಟ ಮಕ್ಕಳನ್ನು ಹತೋಟಿಯಲ್ಲಿಡಲಿಲ್ಲ

[22]ಏಲಿಯು ಬಹಳ ವೃದ್ಧನಾದನು. ತನ್ನ ಗಂಡುಮಕ್ಕಳು ಶೀಲೋವಿನಲ್ಲಿ ಇಸ್ರೇಲರೊಂದಿಗೆ ನಡೆದುಕೊಳ್ಳುತ್ತಿರುವ ರೀತಿಯನ್ನು ಮತ್ತು ಅವರು ದೇವದರ್ಶನ ಗುಡಾರದ ಬಾಗಿಲಿನಲ್ಲಿ ಸೇವೆ ಮಾಡುತ್ತಿರುವ ಸ್ತ್ರೀಯರೊಡನೆ ಕೂಡುತ್ತಿರುವುದನ್ನು ಅವನು ಕೇಳುತ್ತಿದ್ದನು.

[23]ಏಲಿಯು ತನ್ನ ಗಂಡುಮಕ್ಕಳಿಗೆ, ‘‘ಇಲ್ಲಿಯ ಜನರು ನೀವು ಮಾಡುವ ದುಷ್ಕೃತ್ಯಗಳ ಬಗ್ಗೆ ತಿಳಿಸಿದ್ದಾರೆ. ನೀವು ಇಂತಹ ದುಷ್ಕೃತ್ಯಗಳನ್ನು ಏಕೆ ಮಾಡುತ್ತೀರಿ? [24]ಮಕ್ಕಳೇ, ಇಂತಹ ದುಷ್ಕೃತ್ಯಗಳನ್ನು ಮಾಡಬೇಡಿ. ಯೆಹೋವನ ಜನರು ನಿಮ್ಮ ಬಗ್ಗೆ ಕೆಟ್ಟ ಸಂಗತಿಗಳನ್ನು ಮಾತಾಡುತ್ತಿದ್ದಾರೆ. [25]ಒಬ್ಬ ಮನುಷ್ಯನು ಬೇರೊಬ್ಬನ ವಿರುದ್ಧ ಅಪರಾಧ ಮಾಡಿದರೆ, ಯೆಹೋವನು ಅವನಿಗೆ ಸಹಾಯ ಮಾಡಬಹುದು, ಆದರೆ ಒಬ್ಬ ಮನುಷ್ಯನು ಯೆಹೋವನ ವಿರುದ್ಧವೇ ಅಪರಾಧ ಮಾಡಿದರೆ, ಆಗ ಅವನಿಗೆ ಸಹಾಯ ಮಾಡುವವರು ಯಾರು?’’ ಎಂದು ಬುದ್ಧಿಮಾತು ಹೇಳಿದನು.

ಆದರೆ ಏಲಿಯ ಮಾತನ್ನು ಅವನ ಮಕ್ಕಳು ಕೇಳಲಿಲ್ಲ. ಆದುದರಿಂದ ಯೆಹೋವನು ಏಲಿಯ ಮಕ್ಕಳನ್ನು ಕೊಲ್ಲಲು ನಿರ್ಧರಿಸಿದನು.

[26]ಬಾಲಕನಾದ ಸಮುವೇಲನು ದೊಡ್ಡವನಾಗುತ್ತಲೇ ಇದ್ದನು. ಅವನು ದೇವರಿಗೆ ಮತ್ತು ಜನರಿಗೆ ಪ್ರಿಯನಾದನು.

## ಏಲಿಯ ಕುಟುಂಬದ ಬಗ್ಗೆ ಭೀಕರ ಪ್ರವಾದನೆ

[27]ದೇವಮನುಷ್ಯನೊಬ್ಬನು ಏಲಿಯ ಬಳಿಗೆ ಬಂದು, ‘‘ಯೆಹೋವನು ಈ ಸಂಗತಿಗಳನ್ನು ತಿಳಿಸಿದನು: ‘ನಿನ್ನ ಪೂರ್ವಿಕರು ಈಜಿಪ್ಟಿನಲ್ಲಿ ಫರೋಹನ ಗುಲಾಮರಾಗಿದ್ದರು. ಆಗ ನಾನು ನಿನ್ನ ಪೂರ್ವಿಕರಿಗೆ ದರ್ಶನ ನೀಡಿದೆ. [28]ಇಸ್ರೇಲಿನ ಎಲ್ಲಾ ಕುಲಗಳಲ್ಲಿ ನಿನ್ನ ಕುಟುಂಬದವರನ್ನು ನನ್ನ ಯಾಜಕರನ್ನಾಗಿ ಆರಿಸಿಕೊಂಡೆನು. ಏಫೋದನ್ನು ಧರಿಸಿಕೊಳ್ಳುವುದಕ್ಕೂ ಯಜ್ಞವನ್ನು ಅರ್ಪಿಸುವುದಕ್ಕೂ ಧೂಪಹಾಕುವುದಕ್ಕೂ ನಾನು ಅವರನ್ನು ಆರಿಸಿಕೊಂಡೆನು. ಇಸ್ರೇಲರು ನನಗೆ ಅರ್ಪಿಸುವ ಯಜ್ಞಗಳಲ್ಲಿ ಮಾಂಸವನ್ನು ಪಡೆಯುವ ಅವಕಾಶವನ್ನೂ ನಾನು ನಿಮ್ಮ ಕುಲದವರಿಗೆ ನೀಡಿದೆನು. [29]ಹೀಗಿರುವಾಗ ಆ ಯಜ್ಞಗಳನ್ನು ಮತ್ತು ಕಾಣಿಕೆಗಳನ್ನು ನೀವು ಗೌರವಿಸದಿರುವುದೇಕೇ? ನಿನ್ನ ಮಕ್ಕಳನ್ನು ನನಗಿಂತ ಹೆಚ್ಚು ಗೌರವಿಸುತ್ತಿರುವೆ. ಇಸ್ರೇಲರು ನನಗಾಗಿ ತರುವ ಯಜ್ಞಮಾಂಸದ ಉತ್ತಮ ಭಾಗಗಳಿಂದ ನಿಮ್ಮನ್ನು ಕೊಬ್ಬಿಸಿಕೊಂಡಿರುವಿರಿ.’

[30]‘‘ನಿಮ್ಮ ತಂದೆಯ ಕುಟುಂಬವು ಸರ್ವಕಾಲವೂ ಆತನ ಸೇವೆ ಮಾಡುವುದೆಂದು ಇಸ್ರೇಲಿನ ದೇವರಾದ ಯೆಹೋವನು ವಾಗ್ದಾನ ಮಾಡಿದ್ದನು. ಆದರೆ ಈಗ ಯೆಹೋವನು ಇಂತೆನ್ನುತ್ತಾನೆ: ‘ಅದೆಂದಿಗೂ ಸಾಧ್ಯವಿಲ್ಲ. ನನ್ನನ್ನು ಸನ್ಮಾನಿಸುವವರನ್ನು ನಾನೂ ಸನ್ಮಾನಿಸುತ್ತೇನೆ. ಆದರೆ ನನ್ನನ್ನು ತಿರಸ್ಕರಿಸುವವರನ್ನು ನಾನೂ ತಿರಸ್ಕರಿಸುತ್ತೇನೆ. [31]ನಿನ್ನ ಸಂತತಿಯವರನ್ನೆಲ್ಲಾ ನಾಶಮಾಡುವ ಕಾಲವು ಬರುತ್ತಿದೆ. ನಿನ್ನ ಮನೆಯಲ್ಲಿ ಯಾರೂ ವೃದ್ಧಾಪ್ಯದವರೆಗೆ ಬದುಕುವುದಿಲ್ಲ. [32]ಇಸ್ರೇಲಿಗೆ ಶುಭಗಳಾದರೂ ನಿನ್ನ ಮನೆಯಲ್ಲಿ ಅಶುಭಗಳಿರುವುದನ್ನು ನೀನು ನೋಡುವೆ. ನಿನ್ನ ಕುಟುಂಬದಲ್ಲಿ ಯಾರೂ ವೃದ್ಧಾಪ್ಯದವರೆಗೆ ಬದುಕುವುದಿಲ್ಲ. [33]ನನ್ನ ಯಜ್ಞವೇದಿಕೆಯ ಬಳಿಯಲ್ಲಿ ಯಾಜಕಸೇವೆ ಮಾಡುವುದಕ್ಕಾಗಿ ನಾನು ಒಬ್ಬನನ್ನು ಉಳಿಸಿಕೊಳ್ಳುವೆನು. ಅವನು ಬಹು ಮುಪ್ಪಿನವರೆಗೂ ಬದುಕುವನು. ಅವನ ಕಣ್ಣುಗಳು ಕಾಣದೆ ಹೋಗುವವರೆಗೂ ಬಲಹೀನನಾಗುವವರೆಗೂ ಅವನು ಬದುಕುವನು. ಉಳಿದ ನಿನ್ನ ಸಂತತಿಯವರೆಲ್ಲಾ ಖಡ್ಗದಿಂದ ಸಾಯುವರು. [34]ಈ ಸಂಗತಿಗಳು ನಿಜವಾಗುತ್ತವೆಯೆಂದು ತೋರಿಸಲು ನಾನು ನಿನಗೊಂದು ಗುರುತನ್ನು ಕೊಡುವೆನು. ನಿನ್ನ ಇಬ್ಬರು ಮಕ್ಕಳಾದ ಹೊಫ್ನಿ ಮತ್ತು ಫೀನೆಹಾಸರು ಒಂದೇ ದಿನದಲ್ಲಿ ಸಾಯುವರು. ಅದೇ ಆ ಗುರುತು. [35]ನಾನು ನನಗೋಸ್ಕರ ನಂಬಿಗಸ್ತನಾದ ಯಾಜಕನೊಬ್ಬನನ್ನು ಆರಿಸಿಕೊಳ್ಳುತ್ತೇನೆ. ಈ ಯಾಜಕನು ನಾನು ಹೇಳುವುದನ್ನು ಕೇಳುವನು ಮತ್ತು ನನಗೆ ಇಷ್ಟವಾದುದನ್ನು ಮಾಡುವನು. ಈ ಯಾಜಕನ ಕುಟುಂಬವನ್ನು ನಾನು ಬಲಗೊಳಿಸುವೆನು. ನಾನು ಆರಿಸಿಕೊಂಡಿರುವ ರಾಜನ* ಬಳಿಯಲ್ಲಿ ಅವನು ಸದಾಕಾಲ ಸೇವೆಮಾಡುವನು. [36]ಆಗ ನಿನ್ನ ಕುಟುಂಬದವರಲ್ಲಿ ಉಳಿದವರೆಲ್ಲ ಬಂದು ಈ ಯಾಜಕನಿಗೆ ಅಡ್ಡಬೀಳುವರು. ಈ

---

**ಆರಿಸಿಕೊಂಡಿರುವ ರಾಜ** ಅಕ್ಷರಶಃ, ‘‘ಅಭಿಷೇಕಿಸಲ್ಪಟ್ಟವನು.’’

ಜನರೆಲ್ಲ ಅವನಲ್ಲಿ ಬಿಡಿಕಾಸನ್ನೂ ರೊಟ್ಟಿಯ ಚೂರನ್ನೂ
ಬೇಡುವರು. ಅವರೆಲ್ಲ, ‘‘ನಮಗೆ ದೇವಸ್ಥಾನದಲ್ಲಿ
ಯಾಜಕನ ಹುದ್ದೆಯನ್ನು ಕೊಡು, ಅದರಿಂದ ಹೊಟ್ಟೆ
ತುಂಬಿಸಿಕೊಳ್ಳುತ್ತೇವೆ ಎಂದು ಬೇಡಿಕೊಳ್ಳುವರು’’’’
ಎಂದನು.

### ಸಮುವೇಲನಿಗೆ ದೇವರ ಕರೆ

3 ಬಾಲಕನಾದ ಸಮುವೇಲನು ಏಲಿಯ ಕೈಕೆಳಗಿದ್ದು
ಯೆಹೋವನ ಸೇವೆಮಾಡುತ್ತಿದ್ದನು. ಆ ಕಾಲದಲ್ಲಿ
ಯೆಹೋವನು ಜನರೊಂದಿಗೆ ಪದೇಪದೇ ಮಾತಾಡು
ತ್ತಿರಲಿಲ್ಲ; ದರ್ಶನಗಳ ಸಂಖ್ಯೆಯೂ ಕಡಿಮೆಯಾಗಿತ್ತು.
2 ಏಲಿಯ ಕಣ್ಣುಗಳು ಮಂಜಾಗಿ ಕುರುಡನೆನ್ನುವಷ್ಟು
ಕಾಣುತ್ತಿರಲಿಲ್ಲ. ಒಂದು ರಾತ್ರಿ ಏಲಿಯು ತನ್ನ ಸ್ಥಳದಲ್ಲಿ
ಮಲಗಿದ್ದನು. 3 ಸಮುವೇಲನು ಯೆಹೋವನ ಪವಿತ್ರ
ಆಲಯದಲ್ಲಿ ಹಾಸಿಗೆಯ ಮೇಲೆ ಮಲಗಿದ್ದನು.
ಯೆಹೋವನ ಪವಿತ್ರ ಪೆಟ್ಟಿಗೆಯು* ಅಲ್ಲಿಯೇ ಇತ್ತು.
ಯೆಹೋವನ ದೀಪವು ಇನ್ನೂ ಬೆಳಗುತ್ತಿತ್ತು.
4 ಯೆಹೋವನು ಸಮುವೇಲನನ್ನು ಕರೆದನು. ಸಮು
ವೇಲನು, ‘‘ಇಗೋ, ಇಲ್ಲಿದ್ದೇನೆ’’ ಎಂದನು. 5 ಏಲಿಯು
ಕರೆದಿರಬಹುದೆಂದು ಸಮುವೇಲನು ನೆನೆಸಿದನು. ಆದ್ದ
ರಿಂದ ಸಮುವೇಲನು ಏಲಿಯ ಬಳಿಗೆ ಓಡಿಹೋಗಿ,
‘‘ಇಗೋ, ಇಲ್ಲಿದ್ದೇನೆ. ನೀನು ನನ್ನನ್ನು ಕರೆದೆಯಲ್ಲಾ’’
ಅಂದನು.

ಆದರೆ ಏಲಿಯು, ‘‘ನಾನು ನಿನ್ನನ್ನು ಕರೆಯಲಿಲ್ಲ.
ಹೋಗಿ ಮಲಗಿಕೋ’’ ಅಂದನು.

ಸಮುವೇಲನು ಹೋಗಿ ಮಲಗಿಕೊಂಡನು. 6 ನಂತರ
ಯೆಹೋವನು, ‘‘ಸಮುವೇಲನೇ’’ ಎಂದು ಮತ್ತೆ ಕರೆ
ದನು. ಸಮುವೇಲನು ಮತ್ತೆ ಏಲಿಯ ಬಳಿಗೆ ಓಡಿಹೋಗಿ,
‘‘ಇಗೋ, ಇಲ್ಲಿದ್ದೇನೆ. ನೀನು ನನ್ನನ್ನು ಕರೆದೆಯಲ್ಲಾ’’
ಎಂದು ಹೇಳಿದನು.

ಏಲಿಯು, ‘‘ನಾನು ನಿನ್ನನ್ನು ಕರೆಯಲಿಲ್ಲ, ಹೋಗಿ
ಮಲಗಿಕೋ’’ ಅಂದನು.

7 ಆ ವರೆಗೂ ಸಮುವೇಲನಿಗೆ ಯೆಹೋವನ ಅನುಭವ
ವಿರಲಿಲ್ಲ; ಯೆಹೋವನು ಅವನೊಂದಿಗೆ ನೇರವಾಗಿ
ಮಾತಾಡಿರಲಿಲ್ಲ.*

8 ಯೆಹೋವನು ಸಮುವೇಲನನ್ನು ಮೂರನೆಯ ಸಲ
ಕರೆದನು. ಸಮುವೇಲನು ಮತ್ತೆ ಮೇಲೆದ್ದು ಏಲಿಯನ
ಬಳಿಗೆ ಹೋಗಿ, ‘‘ಇಗೋ, ಇಲ್ಲಿದ್ದೇನೆ. ನೀನು ನನ್ನನ್ನು
ಕರೆದೆಯಲ್ಲಾ’’ ಅಂದನು.

ಬಾಲಕನನ್ನು ಕರೆಯುತ್ತಿರುವವನು ಯೆಹೋವ
ನೆಂಬುದು ಏಲಿಗೆ ಆಗ ಅರ್ಥವಾಯಿತು. 9 ಏಲಿಯು
ಸಮುವೇಲನಿಗೆ, ‘‘ಹೋಗಿ ಮಲಗಿಕೋ. ನಿನ್ನನ್ನು ಮತ್ತೆ
ಕರೆದರೆ, ‘ಅಪ್ಪಣೆಯಾಗಲಿ, ಯೆಹೋವನೇ ನಾನು ನಿನ್ನ
ಸೇವಕ, ಕೇಳಿಸಿಕೊಳ್ಳುತ್ತಿದ್ದೇನೆ’ ಎಂದು ಉತ್ತರಿಸು’’
ಎಂಬುದಾಗಿ ಹೇಳಿದನು.

ಸಮುವೇಲನು ತನ್ನ ಸ್ಥಳದಲ್ಲಿ ಮಲಗಲು ಹೋದನು.
10 ಯೆಹೋವನು ಅಲ್ಲಿ ಪ್ರತ್ಯಕ್ಷನಾಗಿ ನಿಂತು ಮೊದಲು
ಕರೆದಂತೆಯೇ ‘‘ಸಮುವೇಲನೆ, ಸಮುವೇಲನೆ’’ ಎಂದು
ಕರೆದನು.

ಸಮುವೇಲನು, ‘‘ಅಪ್ಪಣೆಯಾಗಲಿ, ನಾನು ನಿನ್ನ
ಸೇವಕ, ಕೇಳಿಸಿಕೊಳ್ಳುತ್ತಿದ್ದೇನೆ’’ ಎಂದನು.

11 ಯೆಹೋವನು ಸಮುವೇಲನಿಗೆ, ‘‘ನಾನು ಇಸ್ರೇಲಿ
ನಲ್ಲಿ ಒಂದು ಕಾರ್ಯವನ್ನು ಶೀಘ್ರದಲ್ಲೇ ಮಾಡುವೆನು.
ಈ ಕಾರ್ಯದ ಬಗ್ಗೆ ಕೇಳಿದ ಜನರು ಗಾಬರಿಗೊಳ್ಳುವರು.
12 ನಾನು ಇದನ್ನು ಏಲಿ ಮತ್ತು ಅವನ ಕುಟುಂಬದ ವಿರುದ್ಧ
ಸಂಪೂರ್ಣವಾಗಿ ಮಾಡುತ್ತೇನೆ. 13 ಏಲಿಯ ಕುಟುಂಬ
ವನ್ನು ನಿತ್ಯ ದಂಡನೆಗೆ ಗುರಿಪಡಿಸುತ್ತೇನೆಂದು ನಾನು
ಏಲಿಗೆ ಹೇಳಿರುವೆನು. ಏಲಿಯ ಮಕ್ಕಳು ನನಗೆ ವಿರೋಧ
ವಾಗಿ ಮಾತಾಡಿದ್ದರಿಂದ ಮತ್ತು ಕೆಟ್ಟಕಾರ್ಯಗಳನ್ನು
ಮಾಡಿದ್ದರಿಂದ ನಾನು ಇದನ್ನು ಮಾಡುತ್ತೇನೆ. ಅಲ್ಲದೆ
ಅವರನ್ನು ಹತೋಟಿಯಲ್ಲಿಡಲು ಏಲಿಗೆ ಸಾಧ್ಯವಾಗಲಿಲ್ಲ.
14 ಆದಕಾರಣವೇ, ಏಲಿಯ ಕುಟುಂಬವು ಅರ್ಪಿಸುವ
ಯಜ್ಞವಾಗಲೀ ಧಾನ್ಯನೈವೇದ್ಯವಾಗಲೀ ಅವರ ಪಾಪ
ಗಳಿಗೆ ಪ್ರಾಯಶ್ಚಿತ್ತವಾಗುವುದಿಲ್ಲವೆಂದು ಪ್ರಮಾಣ
ಮಾಡುತ್ತೇನೆ’’ ಎಂದು ಹೇಳಿದನು.

15 ಸಮುವೇಲನು ನಿದ್ರಿಸಿದನು. ಅವನು ಮುಂಜಾನೆ
ಮೇಲೆದ್ದು ಯೆಹೋವನ ಆಲಯದ ಬಾಗಿಲುಗಳನ್ನು
ತೆರೆದನು. ಸಮುವೇಲನು ತಾನು ಕಂಡ ದರ್ಶನದ ಬಗ್ಗೆ
ಏಲಿಗೆ ತಿಳಿಸಲು ಭಯಪಟ್ಟನು.

16 ಆದರೆ ಏಲಿಯು, ‘‘ಸಮುವೇಲನೇ, ನನ್ನ ಮಗನೇ’’
ಎಂದು ಕರೆದನು. ಸಮುವೇಲನು, ‘‘ಇಗೋ, ಇದ್ದೇನೆ’’
ಅಂದನು.

17 ಏಲಿಯು, ‘‘ಯೆಹೋವನು ನಿನಗೆ ಹೇಳಿದ್ದೇನು?
ನನ್ನೊಂದಿಗೆ ಅದನ್ನು ಮುಚ್ಚಿಡಬೇಡ. ಆತನು
ನಿನ್ನೊಂದಿಗೆ ಆಡಿದ ಮಾತುಗಳಲ್ಲಿ ಏನನ್ನಾದರೂ ಮುಚ್ಚಿ
ಟ್ಟರೆ ಆತನು ನಿನ್ನನ್ನು ಶಿಕ್ಷಿಸುತ್ತಾನೆ’’ ಎಂದು ತಿಳಿಸಿದನು.
18 ಸಮುವೇಲನು ಏನನ್ನೂ ಮುಚ್ಚಿಡದೆ, ಎಲ್ಲವನ್ನೂ
ಏಲಿಗೆ ತಿಳಿಸಿದನು.

ಏಲಿಯು, ‘‘ಆತನು ಯೆಹೋವ. ಆತನು ತನಗೆ
ಸರಿಕಾಣುವದನ್ನೇ ಮಾಡಲಿ’’ ಎಂದು ಹೇಳಿದನು.

19 ಯೆಹೋವನು ಸಮುವೇಲನ ಸಂಗಡವಿದ್ದನು;
ಸಮುವೇಲನು ಬೆಳೆದು ದೊಡ್ಡವನಾದನು; ಸಮುವೇಲನ

---

**ಪವಿತ್ರ ಪೆಟ್ಟಿಗೆ** ಒಡಂಬಡಿಕೆಯ ಪೆಟ್ಟಿಗೆ ಕಲ್ಲಿನ ಹಲಗೆಗಳ ಮೇಲೆ ಹತ್ತು ಆಜ್ಞೆಗಳನ್ನು ಬರೆದು ಅವುಗಳನ್ನು ಈ ಪೆಟ್ಟಿಗೆಯಲ್ಲಿಟ್ಟಿದ್ದರು.

**ಯೆಹೋವನು ... ಮಾತಾಡಿರಲಿಲ್ಲ** ಅಕ್ಷರಶಃ, ‘‘ಯೆಹೋವನ ವಾಕ್ಯಗಳು ಇನ್ನೂ ಅವನಿಗೆ ತಿಳಿದಿರಲಿಲ್ಲ.’’

ಯಾವ ಸಂದೇಶವೂ ಸುಳ್ಳಾಗದಂತೆ ಯೆಹೋವನು
ನೋಡಿಕೊಂಡನು. [20]ಸಮುವೇಲನು ಯೆಹೋವನ ನಿಜ
ಪ್ರವಾದಿಯೆಂಬುದು ದಾನಿನಿಂದ ಬೇರ್ಷೆಬದವರೆಗಿದ್ದ
ಎಲ್ಲಾ ಇಸ್ರೇಲರಿಗೂ ಆಗ ತಿಳಿದು ಬಂದಿತು.
[21]ಯೆಹೋವನು ಶೀಲೋವಿನಲ್ಲಿ ಸಮುವೇಲನಿಗೆ
ದರ್ಶನ ಕೊಡುವುದನ್ನು ಮುಂದುವರಿಸಿದನು.
ಯೆಹೋವನು ಸಮುವೇಲನಿಗೆ ತನ್ನ ವಾಕ್ಯದ ಮೂಲಕ
ತನ್ನನ್ನು ಪ್ರಕಟಿಸಿಕೊಂಡನು.

4 ಸಮುವೇಲನ ಸುದ್ದಿಯು ಇಸ್ರೇಲಿನಲ್ಲೆಲ್ಲಾ
ಹರಡಿತು. ಏಲಿಯು ಬಹು ವೃದ್ಧನಾದನು. ಅವನ
ಮಕ್ಕಳು ಯೆಹೋವನ ಸನ್ನಿಧಿಯಲ್ಲಿ ಕೆಟ್ಟಕಾರ್ಯಗಳನ್ನು
ನಡೆಸುತ್ತಲೇ ಇದ್ದರು.

### ಇಸ್ರೇಲರನ್ನು ಫಿಲಿಷ್ಟಿಯರು ಸೋಲಿಸುವರು

ಆ ಕಾಲದಲ್ಲಿ ಫಿಲಿಷ್ಟಿಯರು ಇಸ್ರೇಲರಿಗೆ ವಿರುದ್ಧವಾಗಿ
ಯುದ್ಧಮಾಡಲು ಒಟ್ಟುಗೂಡಿದರು. ಇಸ್ರೇಲರು ಫಿಲಿಷ್ಟಿ
ಯರಿಗೆ ವಿರುದ್ಧವಾಗಿ ಹೊರಟು ಎಬೆನೆಜೆರಿನಲ್ಲಿ
ಪಾಳೆಯಮಾಡಿಕೊಂಡರು; ಫಿಲಿಷ್ಟಿಯರು ಅಫೇಕಿನಲ್ಲಿ
ಪಾಳೆಯಮಾಡಿಕೊಂಡರು. [2]ಫಿಲಿಷ್ಟಿಯರು ಇಸ್ರೇಲರ
ಮೇಲೆ ಆಕ್ರಮಣ ಮಾಡಲು ಸಿದ್ಧರಾದರು. ಹೋರಾಟ
ಆರಂಭವಾಯಿತು.

ಫಿಲಿಷ್ಟಿಯರು ಇಸ್ರೇಲರನ್ನು ಸೋಲಿಸಿ ಇಸ್ರೇಲಿನ ಸೈನ್ಯ
ದಲ್ಲಿ ನಾಲ್ಕು ಸಾವಿರ ಸೈನಿಕರನ್ನು ಸಂಹರಿಸಿದರು.
[3]ಇಸ್ರೇಲರ ಸೈನಿಕರು ಪಾಳೆಯಕ್ಕೆ ಹಿಂದಿರುಗಿದರು.
ಇಸ್ರೇಲರ ಹಿರಿಯರು, ‘‘ಫಿಲಿಷ್ಟಿಯರು ನಮ್ಮನ್ನು ಸೋಲಿ
ಸಲು ಯೆಹೋವನು ಅವಕಾಶ ನೀಡಿದ್ದೇಕೆ? ಶೀಲೋವಿ
ನಿಂದ ಯೆಹೋವನ ಪವಿತ್ರ ಒಡಂಬಡಿಕೆಯ ಪೆಟ್ಟಿಗೆ
ಯನ್ನು ತರಿಸೋಣ. ಈ ರೀತಿ ದೇವರು ನಮ್ಮೊಂದಿಗೆ
ಯುದ್ಧರಂಗಕ್ಕೆ ಬರಲಿ. ಆತನು ನಮ್ಮನ್ನು ಶತ್ರುಗಳಿಂದ
ರಕ್ಷಿಸುತ್ತಾನೆ’’ ಎಂದು ಹೇಳಿದರು.

[4]ಆ ಕಾರಣಕ್ಕಾಗಿ ಶೀಲೋವಿಗೆ ಜನರನ್ನು ಕಳುಹಿ
ಸಿದರು. ಸರ್ವಶಕ್ತನಾದ ಯೆಹೋವನ ಒಡಂಬಡಿಕೆಯ
ಪೆಟ್ಟಿಗೆಯನ್ನು ಜನರು ತಂದರು. ಪೆಟ್ಟಿಗೆಯ ಮೇಲ್ಭಾ
ಗದಲ್ಲಿ ಕೆರೂಬಿಗಳಿದ್ದವು. ಅವುಗಳು ಯೆಹೋವನು
ಕುಳಿತುಕೊಳ್ಳುವ ಸಿಂಹಾಸನದಂತಿದ್ದವು ಏಲಿಯ ಮಕ್ಕ
ಳಾದ ಹೊಫ್ನಿ ಮತ್ತು ಫೀನೆಹಾಸರು ಪೆಟ್ಟಿಗೆಯ
ಜೊತೆಯಲ್ಲಿ ಬಂದರು.

[5]ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯು
ಪಾಳೆಯಕ್ಕೆ ಬಂದಾಗ ಇಸ್ರೇಲರೆಲ್ಲರು ಆರ್ಭಟಿಸಿದರು.
ಅವರ ಆರ್ಭಟವು ನೆಲವನ್ನು ನಡುಗಿಸಿತು. [6]ಇಸ್ರೇಲರ
ಆರ್ಭಟವು ಫಿಲಿಷ್ಟಿಯರಿಗೆ ಕೇಳಿಸಿತು. ‘‘ಇಬ್ರಿಯರ ಪಾಳೆ
ಯದಲ್ಲಿ ಆಗುತ್ತಿರುವ ಆರ್ಭಟಕ್ಕೆ ಕಾರಣವೇನು?’’
ಎಂದು ಅವರು ಕೇಳಿದರು.

ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಇಸ್ರೇಲರ ಪಾಳೆ
ಯಕ್ಕೆ ತಂದಿರುವುದೇ ಅವರ ಆರ್ಭಟಕ್ಕೆ ಕಾರಣವೆಂದು
ಫಿಲಿಷ್ಟಿಯರಿಗೆ ತಿಳಿದು ಬಂದಿತು. [7]ಫಿಲಿಷ್ಟಿಯರು ಭಯ
ಗೊಂಡು, ‘‘ದೇವರುಗಳೇ ಅವರ ಪಾಳೆಯಕ್ಕೆ ಬಂದಿ
ದ್ದಾರೆ! ನಾವು ತೊಂದರೆಯಲ್ಲಿದ್ದೇವೆ. ಹಿಂದೆಂದೂ ಈ
ರೀತಿ ಆಗಿರಲಿಲ್ಲ! [8]ಅಯ್ಯೋ, ಮಹಾಶಕ್ತಿಶಾಲಿಗಳಾದ ಈ
ದೇವರುಗಳಿಂದ ನಮ್ಮನ್ನು ರಕ್ಷಿಸುವರು ಯಾರು! ಈಜಿಪ್ಟಿ
ನವರಿಗೆ ಕಾಯಿಲೆಗಳನ್ನು ಬರಮಾಡಿದ ದೇವರುಗಳು
ಇವರೇ ಅಲ್ಲವೇ. [9]ಫಿಲಿಷ್ಟಿಯರೇ, ಧೈರ್ಯದಿಂದಿರಿ!
ಶೂರರಂತೆ ಹೋರಾಡಿ! ಇಬ್ರಿಯರು ಪುರಾತನ ಕಾಲ
ದಲ್ಲಿ ನಮಗೆ ಗುಲಾಮರಾಗಿದ್ದರು. ಆದಕಾರಣ ಶೂರ
ರಂತೆ ಹೋರಾಡಿರಿ, ಇಲ್ಲವಾದರೆ ನೀವು ಅವರಿಗೆ
ಗುಲಾಮರಾಗುವಿರಿ!’’ ಎಂದು ಹೇಳಿದರು.

[10]ಫಿಲಿಷ್ಟಿಯರು ಶೌರ್ಯದಿಂದ ಹೋರಾಡಿ ಇಸ್ರೇಲ
ರನ್ನು ಸೋಲಿಸಿದರು. ಇಸ್ರೇಲರ ಪ್ರತಿಯೊಬ್ಬ ಸೈನಿಕನೂ
ತನ್ನ ಪಾಳೆಯಕ್ಕೆ ಓಡಿಹೋದನು. ಇಸ್ರೇಲರಿಗೆ ಭೀಕರ
ಸೋಲಾಯಿತು ಮೂವತ್ತು ಸಾವಿರ ಇಸ್ರೇಲರು ಹತ
ರಾದರು. [11]ದೇವರ ಪವಿತ್ರ ಪೆಟ್ಟಿಗೆಯು ಫಿಲಿಷ್ಟಿಯರ ವಶ
ವಾಯಿತು. ಏಲಿಯ ಮಕ್ಕಳಾದ ಹೊಫ್ನಿ ಮತ್ತು
ಫೀನೆಹಾಸರನ್ನು ಅವರು ಕೊಂದರು.

[12]ಆ ದಿನದಂದು ಬೆನ್ಯಾಮೀನನ ಕುಟುಂಬದ ಒಬ್ಬ
ಮನುಷ್ಯನು ದುಃಖದಿಂದ ಬಟ್ಟೆಗಳನ್ನು ಹರಿದುಕೊಂಡು,
ತಲೆಯ ಮೇಲೆ ಧೂಳನ್ನು ಹಾಕಿಕೊಂಡು, ರಣರಂಗ
ದಿಂದ ತಪ್ಪಿಸಿಕೊಂಡು ಓಡಿಹೋದನು. [13]ಅವನು
ಶೀಲೋವನ್ನು ತಲುಪಿದಾಗ ಏಲಿಯು ಪೀಠದ ಮೇಲೆ
ಕುಳಿತಿದ್ದನು. ದೇವರ ಪವಿತ್ರ ಪೆಟ್ಟಿಗೆಗೆ ಏನಾಯಿತೋ
ಎಂದು ಚಿಂತಿಸುತ್ತಾ ಏಲಿಯು ನಗರ ದ್ವಾರದಲ್ಲಿ
ಕುರ್ಚಿಯ ಮೇಲೆ ಕಾಯುತ್ತಾ ಕುಳಿತಿದ್ದನು. ಆಗ
ಬೆನ್ಯಾಮೀನ್ಯನು ಶೀಲೋವನ್ನು ಪ್ರವೇಶಿಸಿ ಅಲ್ಲಿನ
ಕೆಟ್ಟಸುದ್ದಿಯನ್ನು ಹೇಳಿದನು. ನಗರದ ಜನರೆಲ್ಲರು
ಜೋರಾಗಿ ಗೋಳಾಡಿದರು. [14-15]ಏಲಿಯು ತೊಂಭ
ತ್ತೆಂಟು ವರ್ಷದ ವೃದ್ಧನಾಗಿದ್ದನು; ಅವನಿಗೆ ಕಣ್ಣು ಕಾಣು
ತ್ತಿರಲಿಲ್ಲ. ಅವನು ಅಳುವಿನ ಧ್ವನಿಯನ್ನು ಕೇಳಿ, ‘‘ಏಕಿಷ್ಟು
ಗದ್ದಲ?’’ ಎಂದು ಕೇಳಿದನು.

[16]ಆ ಬೆನ್ಯಾಮೀನ್ಯನು ಏಲಿಯ ಬಳಿಗೆ ಹೋಗಿ,
‘‘ನಾನು ಈ ದಿನವೇ ರಣರಂಗದಿಂದ ಓಡಿಬಂದೆನು’’
ಎಂದು ಹೇಳಿದನು.

ಏಲಿಯು, ‘‘ನನ್ನ ಮಗನೇ, ಏನಾಯಿತು?’’ ಎಂದು
ಕೇಳಿದನು.

[17]ಆ ಬೆನ್ಯಾಮೀನ್ಯನು, ‘‘ಇಸ್ರೇಲರು ಫಿಲಿಷ್ಟಿಯರಿಂದ
ಸೋತು, ಹಿಮ್ಮೆಟ್ಟಿದರು. ಇಸ್ರೇಲರ ಪಡೆಯು ಅನೇಕ
ಸೈನಿಕರನ್ನು ಕಳೆದುಕೊಂಡಿತು, ನಿನ್ನ ಮಕ್ಕಳಿಬ್ಬರೂ
ಸತ್ತರು. ಫಿಲಿಷ್ಟಿಯರು ಯೆಹೋವನ ಪವಿತ್ರ

ಪೆಟ್ಟಿಗೆಯನ್ನು ತೆಗೆದುಕೊಂಡು ಹೋದರು'' ಎಂದು
ಹೇಳಿದನು.
18ಯೆಹೋವನ ಪವಿತ್ರ ಪೆಟ್ಟಿಗೆಯ ವಿಚಾರವನ್ನು
ಬೆನ್ಯಾಮೀನ್ಯನು ತಿಳಿಸಿದಾಗ, ಏಲಿಯು ಪೀಠದಿಂದ
ಹಿಂದಕ್ಕೆ ಬಾಗಿಲಿನ ಸಮೀಪದಲ್ಲಿ ಬಿದ್ದನು; ಅವನ
ಕುತ್ತಿಗೆಯು ಮುರಿದು ಬಿತ್ತು. ಏಲಿಯು ಮುದುಕನೂ
ಬೊಜ್ಜುಳ್ಳವನೂ ಆಗಿದ್ದುದರಿಂದ ಸತ್ತನು. ಅವನು
ಇಸ್ರೇಲರನ್ನು ನಲವತ್ತು ವರ್ಷ ನಡೆಸಿದನು.

## ವೈಭವವು ಇಲ್ಲವಾಯಿತು

19ಏಲಿಯ ಸೊಸೆ ಅಂದರೆ ಫೀನೆಹಾಸನ ಹೆಂಡತಿಯು
ಗರ್ಭಿಣಿಯಾಗಿದ್ದಳು. ಹೆರಿಗೆಯ ಸಮಯ ಸಮೀಪಿಸಿತ್ತು.
ಯೆಹೋವನ ಪವಿತ್ರ ಪೆಟ್ಟಿಗೆಯು ಶತ್ರುಗಳ ವಶವಾದ
ದ್ದನ್ನೂ ತನ್ನ ಮಾವನಾದ ಏಲಿಯು ಸತ್ತದ್ದನ್ನೂ ಗಂಡ
ನಾದ ಫೀನೆಹಾಸನು ಸತ್ತ ಸುದ್ದಿಯನ್ನೂ ಅವಳು ಕೇಳಿ
ದಳು. ಈ ಸುದ್ದಿಯನ್ನು ಕೇಳಿದ ತಕ್ಷಣ ಪ್ರಸವವೇದನೆ
ಯಾಗಿ ಮಗುವನ್ನು ಹೆತ್ತಳು. 20ಅವಳಿಗೆ ಸಹಾಯ ಮಾಡು
ತ್ತಿದ್ದ ಸ್ತ್ರೀಯರು, ''ಚಿಂತಿಸಬೇಡ. ನೀನು ಗಂಡುಮಗು
ವಿಗೆ ಜನ್ಮ ನೀಡಿರುವೆ'' ಎಂದು ಹೇಳಿದರು.

ಆದರೆ ಏಲಿಯ ಸೊಸೆಯು ಅವರ ಮಾತಿಗೆ ಉತ್ತರಿ
ಸಲೂ ಇಲ್ಲ, ಲಕ್ಷ್ಯಕೊಡಲೂ ಇಲ್ಲ. 21ಏಲಿಯ
ಸೊಸೆಯು, ''ಇಸ್ರೇಲರ ವೈಭವವು ಇಲ್ಲವಾಯಿತು''
ಎಂದು ಹೇಳಿದಳು. ಅವಳು ತನ್ನ ಮಗುವಿಗೆ
ಈಕಾಬೋದ್ ಎಂಬ ಹೆಸರಿಟ್ಟು ಮೃತಳಾದಳು.
ಯೆಹೋವನ ಪವಿತ್ರ ಪೆಟ್ಟಿಗೆಯು ಶತ್ರುವಶವಾದದ್ದ
ರಿಂದ ಮಾವನು ಮತ್ತು ಗಂಡನು ಸತ್ತದ್ದರಿಂದ ಆಕೆ ತನ್ನ
ಮಗನಿಗೆ ಈಕಾಬೋದ್ ಎಂದು ಹೆಸರಿಟ್ಟಳು.
22ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಫಿಲಿಷ್ಟಿಯರು
ತೆಗೆದುಕೊಂಡು ಹೋದದ್ದರಿಂದ ಆಕೆಯು, ''ಇಸ್ರೇಲರ
ವೈಭವ ಇಲ್ಲವಾಯಿತು'' ಎಂದು ಹೇಳಿದಳು.

## ದೇವರ ಪವಿತ್ರ ಪೆಟ್ಟಿಗೆಯಿಂದ ಫಿಲಿಷ್ಟಿಯರಿಗೆ ತೊಂದರೆ

5 ಫಿಲಿಷ್ಟಿಯರು ದೇವರ ಪವಿತ್ರ ಪೆಟ್ಟಿಗೆಯನ್ನು
ಎಬೆನೆಜೆರಿನಿಂದ ಅಷ್ಡೋದಿಗೆ ತೆಗೆದುಕೊಂಡು
ಹೋದರು. 2ಅವರು ದೇವರ ಪವಿತ್ರ ಪೆಟ್ಟಿಗೆಯನ್ನು
ದಾಗೋನನ ಗುಡಿಗೆ ತೆಗೆದುಕೊಂಡು ಹೋಗಿ
ದಾಗೋನಿನ ಪಕ್ಕದಲ್ಲಿಟ್ಟರು. 3ಅಷ್ಡೋದಿನ ಜನರು
ಮಾರನೆಯ ದಿನ ಬೆಳಿಗ್ಗೆ ಎದ್ದಾಗ, ದಾಗೋನನ
ವಿಗ್ರಹವು ಯೆಹೋವನ ಪೆಟ್ಟಿಗೆಯ ಮುಂದೆ
ಬೋರಲಾಗಿ ಬಿದ್ದಿತ್ತು.

ಅಷ್ಡೋದಿನ ಜನರು ದಾಗೋನ್ ವಿಗ್ರಹವನ್ನು ಅದರ
ಸ್ಥಳದಲ್ಲಿ ಮತ್ತೆ ನಿಲ್ಲಿಸಿದರು. 4ಆದರೆ ಮರುದಿನ ಬೆಳಿಗ್ಗೆ
ಅಷ್ಡೋದಿನ ಜನರು ಎದ್ದಾಗ ದಾಗೋನ್ ವಿಗ್ರಹವು
ನೆಲದ ಮೇಲೆ ಯೆಹೋವನ ಪವಿತ್ರ ಪೆಟ್ಟಿಗೆಯ ಮುಂದೆ
ಬೋರಲ ಬಿದ್ದಿತ್ತು. ದಾಗೋನಿನ ತಲೆಯು ಮತ್ತು
ಕೈಗಳು ಮುರಿದು ಹೊಸ್ತಿಲಿನ ಮೇಲೆ ಬಿದ್ದಿದ್ದವು; ದೇಹವು
ಏಕ ಶಿಲೆಯಾಗಿ ಬಿದ್ದಿತ್ತು. 5ಆದಕಾರಣವೇ ಇಂದಿಗೂ
ಸಹ ಅಷ್ಡೋದಿನಲ್ಲಿ ದಾಗೋನನ ಮಂದಿರವನ್ನು
ಪ್ರವೇಶಿಸುವ ಯಾಜಕರಾಗಲೀ ಇಲ್ಲವೆ ಇತರೆ ಜನ
ರಾಗಲೀ ಹೊಸ್ತಿಲನ್ನು ತುಳಿಯುವುದಿಲ್ಲ.

6ಅಷ್ಡೋದಿನ ಮತ್ತು ಅವರ ನೆರೆಹೊರೆಯ ಜನರ
ಜೀವನವನ್ನು ಯೆಹೋವನು ಕಠಿಣಗೊಳಿಸಿದನು.
ಯೆಹೋವನು ಅವರಿಗೆ ಹೆಚ್ಚು ತೊಂದರೆ ಕೊಟ್ಟನು.
ಆತನು ಅವರಿಗೆ ಗಡ್ಡೆರೋಗವನ್ನು ಬರಮಾಡಿದನು.
ಅಲ್ಲದೆ ಯೆಹೋವನು ಅವರ ಬಳಿಗೆ ಇಲಿಗಳನ್ನು ಕಳುಹಿ
ಸಿದನು. ಆ ಇಲಿಗಳು ಅವರ ಹಡುಗುಳಲ್ಲೆಲ್ಲಾ ಮತ್ತು
ಭೂಮಿಯಲ್ಲೆಲ್ಲಾ ಹರಡಿಕೊಂಡವು. ನಗರದ ಜನರು
ಬಹು ಭಯಗೊಂಡರು. 7ಇದನ್ನೆಲ್ಲಾ ಕಂಡ ಅಷ್ಡೋದಿನ
ಜನರು, ''ಇಸ್ರೇಲರ ದೇವರ ಈ ಪವಿತ್ರ ಪೆಟ್ಟಿಗೆಯು
ಇಲ್ಲಿರಬಾರದು. ಇಸ್ರೇಲರ ದೇವರು ನಮ್ಮನ್ನೂ ನಮ್ಮ
ದೇವರಾದ ದಾಗೋನನನ್ನೂ ಬಾಧಿಸುತ್ತಿದ್ದಾನೆ'' ಎಂದು
ಹೇಳಿದರು.

8ಅಷ್ಡೋದಿನ ಜನರು ಫಿಲಿಷ್ಟಿಯರ ಐದು ಮಂದಿ
ಅಧಿಪತಿಗಳನ್ನು ಒಟ್ಟಿಗೆ ಸೇರಿಸಿ ''ಇಸ್ರೇಲರ ಯೆಹೋವನ
ಪವಿತ್ರ ಪೆಟ್ಟಿಗೆಯನ್ನು ನಾವು ಏನು ಮಾಡೋಣ?''
ಎಂದು ಕೇಳಿದರು.

ಅಧಿಪತಿಗಳು, ''ಇಸ್ರೇಲರ ಪವಿತ್ರ ಪೆಟ್ಟಿಗೆಯನ್ನು
'ಗತ್' ನಗರಕ್ಕೆ ಕಳುಹಿಸಿ'' ಎಂದು ಹೇಳಿದರು.
ಅಂತೆಯೇ, ಅವರು ಅದನ್ನು ಗತ್ ನಗರಕ್ಕೆ
ಕಳುಹಿಸಿದರು.

9ಆದರೆ ಫಿಲಿಷ್ಟಿಯರು ದೇವರ ಪವಿತ್ರ ಪೆಟ್ಟಿಗೆಯನ್ನು
'ಗತ್'ಗೆ ಕಳುಹಿಸಿದ ನಂತರ ಯೆಹೋವನು 'ಗತ್' ನಗರ
ವನ್ನು ದಂಡಿಸಿದನು. ಅಲ್ಲಿಯ ಜನರು ಬಹಳ ಭಯ
ಗೊಂಡರು. ಚಿಕ್ಕವರು, ದೊಡ್ಡವರು ಎನ್ನದೆ ಎಲ್ಲರಿಗೂ
ದೇವರು ತೊಂದರೆ ಮಾಡಿದನು. ಗತ್ ಜನರಿಗೂ
ದೇವರು ಗಡ್ಡೆರೋಗವನ್ನು ಬರಮಾಡಿದನು. 10ಆದುದ
ರಿಂದ ಫಿಲಿಷ್ಟಿಯರು ದೇವರ ಪವಿತ್ರ ಪೆಟ್ಟಿಗೆಯನ್ನು
ಎಕ್ರೋನಿಗೆ ಕಳುಹಿಸಿದರು.

ದೇವರ ಪವಿತ್ರ ಪೆಟ್ಟಿಗೆಯು ಎಕ್ರೋನಿಗೆ ಬಂದಾಗ,
ಅಲ್ಲಿನ ಜನರು, ''ಇಸ್ರೇಲರ ದೇವರನ್ನು ನಮ್ಮ
ನಗರವಾದ ಎಕ್ರೋನಿಗೆ ನೀವೇಕೆ ತರುತ್ತಿರುವಿರಿ?
ನಮ್ಮನ್ನೂ ನಮ್ಮ ಜನರನ್ನೂ ನೀವು ಕೊಲ್ಲಬೇಕೆಂದಿರು
ವಿರಾ?'' ಎಂದು ಆಕ್ಷೇಪಿಸಿದರು. 11ಎಕ್ರೋನಿನ ಜನರು
ಫಿಲಿಷ್ಟಿಯರ ಅಧಿಪತಿಗಳನ್ನೆಲ್ಲಾ ಒಟ್ಟಿಗೆ ಸೇರಿಸಿ,
''ಇಸ್ರೇಲರ ದೇವರ ಪವಿತ್ರಪೆಟ್ಟಿಗೆಯು ನಮ್ಮನ್ನೂ ನಮ್ಮ
ಜನರನ್ನೂ ಕೊಲ್ಲುವುದಕ್ಕೆ ಮೊದಲೇ ಅದನ್ನು ಅದರ
ಸ್ವಸ್ಥಳಕ್ಕೆ ಕಳುಹಿಸಿ'' ಎಂದು ಹೇಳಿದರು.

ಎಕ್ರೋನಿನ ಜನರು ಬಹಳ ಹೆದರಿಕೊಂಡಿದ್ದರು.
ದೇವರು ಅಲ್ಲಿಯ ಜನರ ಜೀವನವನ್ನು ಬಹು ಕಠಿಣ
ಗೊಳಿಸಿದ್ದನು. 12ಬಹಳ ಜನರು ಸತ್ತರು; ಸಾಯದೆ
ಉಳಿದ ಜನರಿಗೆ ಗಡ್ಡೆರೋಗವು ಬಂದಿತು. ಅವರ
ಗೋಳಾಟವು ಆಕಾಶಮಂಡಲವನ್ನು ಮುಟ್ಟಿತ್ತು.

### ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಅದರ ಸ್ವಂತ ಸ್ಥಳಕ್ಕೆ ಹಿಂತಿರುಗಿಸಿದ್ದು

6 ಫಿಲಿಷ್ಟಿಯರು ಪವಿತ್ರ ಪೆಟ್ಟಿಗೆಯನ್ನು ಏಳು ತಿಂಗಳ
ಕಾಲ ತಮ್ಮ ಪ್ರದೇಶದಲ್ಲಿ ಇರಿಸಿಕೊಂಡಿದ್ದರು.
2ಫಿಲಿಷ್ಟಿಯರು ತಮ್ಮ ಅರ್ಚಕರನ್ನು ಮತ್ತು ಮಾಂತ್ರಿಕ
ರನ್ನು ಕರೆದು, ‘‘ಯೆಹೋವನ ಪೆಟ್ಟಿಗೆಯನ್ನು ಏನು
ಮಾಡೋಣ? ಇದನ್ನು ಮರಳಿ ಹಿಂದಕ್ಕೆ ಕಳುಹಿಸುವುದು
ಹೇಗೆ?’’ ಎಂದು ಕೇಳಿದರು.
3ಅರ್ಚಕರು ಮತ್ತು ಮಾಂತ್ರಿಕರು, ‘‘ಇಸ್ರೇಲರ ಪವಿತ್ರ
ಪೆಟ್ಟಿಗೆಯನ್ನು ಹಿಂದಕ್ಕೆ ಕಳುಹಿಸುವುದಾದರೆ, ಬರಿದಾಗಿ
ಕಳುಹಿಸಬೇಡಿ. ನೀವು ಕಾಣಿಕೆಗಳನ್ನು ಕಳುಹಿಸಲೇ
ಬೇಕು. ಆಗ ಇಸ್ರೇಲರ ದೇವರು ನಿಮ್ಮ ಪಾಪಗಳನ್ನು
ಪರಿಹರಿಸುತ್ತಾನೆ. ಆಗ ನೀವೆಲ್ಲಾ ಗುಣಹೊಂದುವಿರಿ;
ಶುದ್ಧರಾಗುವಿರಿ. ದೇವರು ನಿಮ್ಮನ್ನು ದಂಡಿಸುವುದನ್ನು
ನಿಲ್ಲಿಸಬೇಕಾದರೆ ನೀವು ಈ ಕಾರ್ಯಗಳನ್ನು ಮಾಡ
ಬೇಕು. ಆಗ ದೇವರು ನಿಮ್ಮನ್ನು ಬಾಧಿಸುವುದಿಲ್ಲ’’
ಎಂದು ಉತ್ತರಿಸಿದರು.
4ಫಿಲಿಷ್ಟಿಯರು, ‘‘ಇಸ್ರೇಲರ ದೇವರು ನಮ್ಮನ್ನು
ಕ್ಷಮಿಸಬೇಕಾದರೆ ನಾವು ಯಾವ ಕಾಣಿಕೆಗಳನ್ನು
ಕಳುಹಿಸಬೇಕು?’’ ಎಂದು ಕೇಳಿದರು.
ಅರ್ಚಕರು ಮತ್ತು ಮಾಂತ್ರಿಕರು, ‘‘ನಿಮ್ಮಲ್ಲಿ ಐದು
ಮಂದಿ ಅಧಿಪತಿಗಳಿದ್ದೀರಿ. ಪ್ರತಿಯೊಂದು ನಗರಕ್ಕೆ ಒಬ್ಬ
ಅಧಿಪತಿಯಿದ್ದಾನೆ. ನೀವು ಮತ್ತು ನಿಮ್ಮ ಅಧಿಪತಿ
ಗಳೆಲ್ಲರೂ ಒಂದೇ ರೀತಿಯಲ್ಲಿ ತೊಂದರೆಗೊಳ
ಗಾಗಿದ್ದೀರಿ. ಆದುದರಿಂದ ಚಿನ್ನದಲ್ಲಿ ಐದು ಗಡ್ಡೆಗಳನ್ನು
ಹಾಗೂ ಐದು ಇಲಿಗಳನ್ನು ಮಾಡಿಸಬೇಕು. 5ಹೀಗೆ ನಿಮ್ಮ
ದೇಶವನ್ನು ನಾಶಗೊಳಿಸುತ್ತಿರುವ ಗಡ್ಡೆಗಳ, ಇಲಿಗಳ
ಮಾದರಿಗಳನ್ನು ಮಾಡಿಸಿರಿ. ಇಸ್ರೇಲರ ದೇವರಿಗೆ ಚಿನ್ನದ
ಆ ಮಾದರಿಗಳನ್ನು ಕಾಣಿಕೆಯಾಗಿ ಸಲ್ಲಿಸಿರಿ. ಆಗ
ಇಸ್ರೇಲರ ದೇವರು ನಿಮ್ಮನ್ನೂ ನಿಮ್ಮ ದೇವರುಗಳನ್ನೂ
ನಿಮ್ಮ ದೇಶವನ್ನೂ ಶಿಕ್ಷಿಸುವುದನ್ನು ನಿಲ್ಲಿಸಬಹುದು.
6ಫರೋಹನಂತೆ ಮತ್ತು ಈಜಿಪ್ಟಿನವರಂತೆ ಮೊಂಡರಾಗ
ಬೇಡಿ. ದೇವರು ಈಜಿಪ್ಟಿನವರನ್ನು ದಂಡಿಸಿದನು.
ಆದ್ದರಿಂದ ಇಸ್ರೇಲರನ್ನು ಕಳುಹಿಸಿಕೊಡುವಂತೆ ಈಜಿಪ್ಟಿ
ನವರನ್ನು ಬಲವಂತ ಮಾಡಲಾಯಿತು.
7‘‘ಈಗ ಒಂದು ಹೊಸ ಬಂಡಿಯನ್ನು ಮಾಡಿಸಿ ಮತ್ತು
ಈಗ ತಾನೆ ಕರು ಹಾಕಿರುವ ಎರಡು ಹಸುಗಳನ್ನು
ತೆಗೆದುಕೊಳ್ಳಿರಿ. ಈ ಹಸುಗಳು ಹೊಲಗಳಲ್ಲಿ ಹಿಂದೆಂದೂ
ನೊಗ ಹೊತ್ತಿಲ್ಲದಂಥವುಗಳಾಗಿರಬೇಕು. ಈ ಹಸು
ಗಳನ್ನು ಬಂಡಿಗೆ ಹೂಡಿರಿ ಮತ್ತು ಕರುಗಳನ್ನು ಮನೆಗೆ
ತೆಗೆದುಕೊಂಡು ಹೋಗಿ ಅವುಗಳನ್ನು ದೊಡ್ಡಿಯಲ್ಲಿ
ಬಿಡಿರಿ. ಅವುಗಳು ತಮ್ಮ ತಾಯಂದಿರನ್ನು ಹಿಂಬಾಲಿಸಲು
ಅವಕಾಶಕೊಡಕೂಡದು.* 8ಯೆಹೋವನ ಪವಿತ್ರ
ಪೆಟ್ಟಿಗೆಯನ್ನು ಬಂಡಿಯ ಮೇಲಿಡಿರಿ. ಚಿನ್ನದ ಮಾದರಿ
ಗಳನ್ನು ಚೀಲದಲ್ಲಿಟ್ಟು ಪೆಟ್ಟಿಗೆಯ ಪಕ್ಕದಲ್ಲಿಡಿರಿ. ಈ
ಚಿನ್ನದ ಮಾದರಿಗಳು ನೀವು ನಿಮ್ಮ ಪಾಪ ಕ್ಷಮೆಗಾಗಿ
ದೇವರಿಗೆ ಕಳುಹಿಸುತ್ತಿರುವ ಕಾಣಿಕೆಗಳಾಗಿವೆ; ಬಂಡಿ
ಯನ್ನು ಅದರ ದಾರಿಯಲ್ಲಿ ಕಳುಹಿಸಿರಿ. 9ಆದರೆ ಅದರ
ಕಡೆ ಗಮನವಿರಲಿ. ಅದು ತಾನಾಗಿ ಇಸ್ರೇಲಿಗೆ ಸೇರಿದ
ಬೇತ್‌ಷೆಮೆಷಿನ ಕಡೆಗೆ ಹೋದರೆ, ಆಗ ಆ ದೊಡ್ಡ
ಕೇಡನ್ನು ನಮಗುಂಟು ಮಾಡಿದವನು ಯೆಹೋವನೇ
ಸರಿ. ಆದರೆ ಆ ಹಸುಗಳು ಬೇತ್‌ಷೆಮೆಷಿಗೆ ಹೋಗ
ದಿದ್ದರೆ, ನಮ್ಮನ್ನು ಶಿಕ್ಷಿಸಿದವನು ಯೆಹೋವನಲ್ಲವೆಂದು
ನಮಗೆ ಗೊತ್ತಾಗುವುದು. ನಮಗುಂಟಾದ ಕಾಯಿಲೆಯು
ತಾನಾಗಿಯೇ ಬಂದದ್ದೆಂದು ತಿಳಿಯುವುದು’’ ಎಂದು
ಹೇಳಿದರು.
10ಅರ್ಚಕರು ಮತ್ತು ಮಾಂತ್ರಿಕರು ಹೇಳಿದಂತೆಯೇ
ಫಿಲಿಷ್ಟಿಯರು ಮಾಡಿದರು. ಫಿಲಿಷ್ಟಿಯರು ಆಗ ತಾನೇ
ಕರುಹಾಕಿದ ಎರಡು ಹಸುಗಳನ್ನು ತಂದು, ಅವುಗಳನ್ನು
ಬಂಡಿಗೆ ಹೂಡಿದರು. ಅವುಗಳ ಕರುಗಳನ್ನು ಮನೆಯ
ದೊಡ್ಡಿಯಲ್ಲಿ ಬಿಟ್ಟರು. 11ಆಮೇಲೆ ಫಿಲಿಷ್ಟಿಯರು
ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಬಂಡಿಯ
ಮೇಲಿಟ್ಟರು. ಅಲ್ಲದೆ ಚಿನ್ನದ ಗಡ್ಡೆಗಳನ್ನೂ ಇಲಿಗಳನ್ನೂ
ಚೀಲದೊಳಗೆ ಹಾಕಿ ಬಂಡಿಯ ಮೇಲಿಟ್ಟರು. 12ಹಸು
ಗಳು ಬೇತ್‌ಷೆಮೆಷಿಗೆ ನೇರವಾಗಿ ಹೋದವು. ಅವು
ದಾರಿಯಲ್ಲಿಯೇ ಹೋದವು. ಅವು ದಾರಿಯುದ್ದಕ್ಕೂ
ಕೂಗುತ್ತಾ ನಡೆದವು. ಅವು ಎಡಕ್ಕಾಗಲೀ ಬಲಕ್ಕಾಗಲೀ
ತಿರುಗಲಿಲ್ಲ. ಪಿಲಿಷ್ಟಿಯರ ಅಧಿಪತಿಗಳು ಬೇತ್‌ಷೆಮೆಷಿನ
ಗಡಿಯವರೆಗೂ ಹಸುಗಳನ್ನು ಹಿಂಬಾಲಿಸಿಕೊಂಡು
ಹೋದರು. 13ಬೇತ್‌ಷೆಮೆಷಿನ ಕಣಿವೆಯಲ್ಲಿ ಅಲ್ಲಿನ
ಜನರು ಗೋಧಿಯ ಬೆಳೆಯನ್ನು ಕೊಯ್ಯುತ್ತಿದ್ದರು.
ಅವರು ಕಣ್ಣೆತ್ತಿ ನೋಡಿದಾಗ, ಪವಿತ್ರ ಪೆಟ್ಟಿಗೆಯು
ಅವರಿಗೆ ಕಾಣಿಸಿತು. ಅವರಿಗೆ ಬಹಳ ಸಂತೋಷ
ವಾಯಿತು. ಅವರು ಅದನ್ನು ಸ್ವೀಕರಿಸಲು ಓಡಿ
ಹೋದರು. 14-15ಬೇತ್‌ಷೆಮೆಷಿನ, ಯೆಹೋಶುವನಿಗೆ

---

**ಅವುಗಳು … ಅವಕಾಶ ಕೊಡಕೂಡದು** ‘‘ಹಸುಗಳು ತಮ್ಮ ಕರುಗಳನ್ನು ಕಾಣದೆ ಬೇತ್‌ಷೆಮೆಷಿಗೆ ನೇರವಾಗಿ ಹೋದದ್ದಾದರೆ ಆಗ ಆ ದೇವರು ಮುನ್ನಡೆಸುತ್ತಾನೆಂದು ತಿಳಿಯಬಹುದು’’ ಎಂಬುದಾಗಿ ಫಿಲಿಷ್ಟಿಯರು ಯೋಚಿಸಿದರು. ದೇವರು ಕಾಣಿಕೆಗಳನ್ನು ಸ್ವೀಕರಿಸಿದ ಎಂಬುದನ್ನೂ ಇದು ತೋರಿಸುತ್ತದೆ.

ಸೇರಿದ ಹೊಲಕ್ಕೆ ಆ ಬಂಡಿಯು ಬಂದಿತು. ಆ ಹೊಲದ
ಒಂದು ದೊಡ್ಡ ಕಲ್ಲಿನ ಬಳಿ ಆ ಬಂಡಿಯು ನಿಂತಿತು.
ಬೇತ್‌ಷೆಮೆಷಿನ ಜನರು ಬಂಡಿಯ ಕಟ್ಟಿಗೆಗಳನ್ನು
ಒಡೆದು. ಆ ಹಸುಗಳನ್ನು ಯೆಹೋವನಿಗೆ ಅರ್ಪಿಸಿದರು.

ಕೆಲವು ಲೇವಿಯರು ಯೆಹೋವನ ಪವಿತ್ರ ಪೆಟ್ಟಿಗೆ
ಯನ್ನು ಇಳಿಸಿದರು. ಅಲ್ಲದೆ ಅವರು ಚಿನ್ನದ ಮಾದರಿ
ಗಳಿದ್ದ ಚೀಲವನ್ನು ಇಳಿಸಿದರು. ಲೇವಿಯರು
ಯೆಹೋವನ ಪೆಟ್ಟಿಗೆಯನ್ನು ಮತ್ತು ಆ ಚೀಲವನ್ನು
ದೊಡ್ಡಕಲ್ಲಿನ ಮೇಲಿಟ್ಟರು. ಅದೇ ದಿನ ಬೇತ್‌ಷೆಮೆಷಿನ
ಜನರು ಯೆಹೋವನಿಗೆ ಸರ್ವಾಂಗಹೋಮಗಳನ್ನು
ಅರ್ಪಿಸಿದರು.

16ಬೇತ್‌ಷೆಮೆಷಿನ ಜನರು ಮಾಡಿದ್ದನ್ನೆಲ್ಲ ಫಿಲಿಷ್ಟಿ
ಯರ ಐದು ಮಂದಿ ಅಧಿಪತಿಗಳು ನೋಡಿ ಅದೇ ದಿನ
ಎಕ್ರೋನಿಗೆ ಹಿಂದಿರುಗಿದರು.

17ಈ ರೀತಿ, ಫಿಲಿಷ್ಟಿಯರು ತಾವು ಯೆಹೋವನಿಗೆ
ಮಾಡಿದ ಪಾಪಕ್ಕೆ ಪ್ರಾಯಶ್ಚಿತ್ತವಾಗಿ ಚಿನ್ನದ ಗಡ್ಡೆಗಳನ್ನು
ಕಾಣಿಕೆಗಳನ್ನಾಗಿ ಕಳುಹಿಸಿದರು. ಅವರು ಪ್ರತಿಯೊಂದು
ಫಿಲಿಷ್ಟಿಯ ನಗರಕ್ಕೆ ಒಂದರಂತೆ ಚಿನ್ನದ ಗಡ್ಡೆಗಳನ್ನು
ಕಳುಹಿಸಿದ್ದರು. ಅಷ್ಡೋದ್ ಗಾಜಾ, ಅಷ್ಕೆಲೋನ್,
ಗತ್ ಮತ್ತು ಎಕ್ರೋನ್‌ಗಳೇ ಆ ನಗರಗಳು. 18ಫಿಲಿಷ್ಟಿ
ಯರು ಚಿನ್ನದ ಇಲಿಗಳನ್ನೂ ಕಳುಹಿಸಿದ್ದರು. ಫಿಲಿಷ್ಟಿಯರ
ಐದು ಅಧಿಪತಿಗಳಿಗೆ ಸೇರಿದ್ದ ಐದು ಪಟ್ಟಣಗಳ
ಸಂಖ್ಯೆಗನುಸಾರವಾಗಿ ಈ ಇಲಿಗಳಿದ್ದವು. ಈ ಪಟ್ಟಣಗಳ
ಸುತ್ತ ಗೋಡೆಗಳಿದ್ದು ಹಳ್ಳಿಗಳು ಈ ಪಟ್ಟಣಗಳನ್ನು
ಸುತ್ತುವರಿದಿದ್ದವು.

ಬೇತ್‌ಷೆಮೆಷಿನ ಜನರು ಯೆಹೋವನ ಪವಿತ್ರ ಪೆಟ್ಟಿಗೆ
ಯನ್ನು ಒಂದು ಕಲ್ಲಿನ ಮೇಲಿಟ್ಟರು. ಬೇತ್‌ಷೆಮೆಷಿನ
ವನಾದ ಯೆಹೋಶುವನ ಹೊಲದಲ್ಲಿ ಆ ಕಲ್ಲು ಈಗಲೂ
ಇದೆ.

19ಆದರೆ ಯಾಜಕರಿಲ್ಲದ ಕಾರಣ ಬೇತ್‌ಷೆಮೆಷಿನ
ಜನರು ಪವಿತ್ರ ಪೆಟ್ಟಿಗೆಯನ್ನು ಹಣಿಕಿ ನೋಡಿದ್ದರಿಂದ
ಬೇತ್‌ಷೆಮೆಷಿನ ಎಪ್ಪತ್ತು ಜನರನ್ನು ಯೆಹೋವನು
ಕೊಂದನು. ಯೆಹೋವನು ಕ್ರೂರವಾಗಿ ಶಿಕ್ಷಿಸಿದ್ದರಿಂದ
ಬೇತ್‌ಷೆಮೆಷಿನ ಜನರು ಗೋಳಾಡಿ, 20“ಈ ಪವಿತ್ರ
ಪೆಟ್ಟಿಗೆಯನ್ನು ನೋಡಿಕೊಳ್ಳಬಲ್ಲ ಯಾಜಕನೆಲ್ಲಿ
ದ್ದಾನೆ?* ಈ ಪೆಟ್ಟಿಗೆಯು ಇಲ್ಲಿಂದ ಎಲ್ಲಿಗೆ ಹೋಗ
ಬೇಕಾಗಿದೆ?” ಎಂದು ಬೇತ್‌ಷೆಮೆಷಿನ ಜನರು
ಪ್ರಶ್ನಿಸಿದರು.

21ಕಿರ್ಯತ್ಯಾರೀಮಿನಲ್ಲಿ ಒಬ್ಬ ಯಾಜಕನಿದ್ದನು.
ಬೇತ್‌ಷೆಮೆಷಿನ ಜನರು ಕಿರ್ಯತ್ಯಾರೀಮಿನವರ ಬಳಿಗೆ
ಸಂದೇಶಕರನ್ನು ಕಳುಹಿಸಿ, “ಫಿಲಿಷ್ಟಿಯರು ಯೆಹೋವನ
ಪವಿತ್ರ ಪೆಟ್ಟಿಗೆಯನ್ನು ಹಿಂದಕ್ಕೆ ತಂದಿರುವರು. ನೀವು
ಬಂದು ಅದನ್ನು ನಿಮ್ಮ ಪಟ್ಟಣಕ್ಕೆ ತೆಗೆದುಕೊಂಡು
ಹೋಗಿ” ಎಂದು ತಿಳಿಸಿದರು.

7 ಕಿರ್ಯತ್ಯಾರೀಮಿನ ಜನರು ಬಂದು, ಯೆಹೋವನ
ಪವಿತ್ರ ಪೆಟ್ಟಿಗೆಯನ್ನು ತೆಗೆದುಕೊಂಡು ಹೋದರು.
ಯೆಹೋವನ ಪೆಟ್ಟಿಗೆಯನ್ನು ಬೆಟ್ಟದ ಮೇಲಿದ್ದ ಅಬೀನಾ
ದಾಬನ ಮನೆಯಲ್ಲಿಟ್ಟರು. ಯೆಹೋವನ ಪೆಟ್ಟಿಗೆಯನ್ನು
ಕಾಯುವುದಕ್ಕಾಗಿ ಅಬೀನಾದಾಬನ ಮಗನಾದ
ಎಲ್ಲಾಜಾರನನ್ನು ಪ್ರತಿಷ್ಠಿಸಿದರು. 2ಈ ಪೆಟ್ಟಿಗೆಯು
ಕಿರ್ಯತ್ಯಾರೀಮಿನವರಲ್ಲಿ ಬಹುಕಾಲದವರೆಗೆ ಅಂದರೆ
ಇಪ್ಪತ್ತು ವರ್ಷಗಳವರೆಗೆ ಇತ್ತು.

### ಯೆಹೋವನು ಇಸ್ರೇಲರನ್ನು ರಕ್ಷಿಸುವನು

ಇಸ್ರೇಲರು ಯೆಹೋವನ ಮಾರ್ಗವನ್ನು ಮತ್ತೆ
ಅನುಸರಿಸಲು ಆರಂಭಿಸಿದರು. 3ಸಮುವೇಲನು ಇಸ್ರೇಲ
ರಿಗೆ, “ನೀವು ಯೆಹೋವನ ಬಳಿಗೆ ಪೂರ್ಣಮನಸ್ಸಿನಿಂದ
ಮತ್ತೆ ಬರುವುದಾದರೆ ನಿಮ್ಮ ಬಳಿಯಿರುವ ಅನ್ಯದೇವರು
ಗಳನ್ನು ಎಸೆಯಬೇಕು. ನೀವು ಅಷ್ಟೋರೆತ್ ದೇವತೆಯ
ವಿಗ್ರಹಗಳನ್ನು ತ್ಯಜಿಸಬೇಕು. ನೀವು ನಿಮ್ಮನ್ನು
ಯೆಹೋವನಿಗೆ ಸಂಪೂರ್ಣವಾಗಿ ಒಪ್ಪಿಸಿಕೊಟ್ಟು ಆತನ
ಸೇವೆಯನ್ನು ಮಾತ್ರ ಮಾಡಬೇಕು. ಆಗ ಆತನು ನಿಮ್ಮನ್ನು
ಫಿಲಿಷ್ಟಿಯರಿಂದ ರಕ್ಷಿಸುತ್ತಾನೆ” ಎಂದು ಹೇಳಿದನು.

4ಆದ್ದರಿಂದ ಇಸ್ರೇಲರು ಬಾಳ್‌ದೇವರನ್ನೂ
ಅಷ್ಟೋರೆತ್ ದೇವತೆಯನ್ನೂ ತ್ಯಜಿಸಿ ಯೆಹೋವನ
ಸೇವೆಯನ್ನು ಮಾತ್ರ ಮಾಡಿದರು.

5ಸಮುವೇಲನು, “ಇಸ್ರೇಲರೆಲ್ಲರು ಮಿಚ್ಪೆಯಲ್ಲಿ
ಒಟ್ಟುಗೂಡಬೇಕು. ನಾನು ನಿಮಗಾಗಿ ಯೆಹೋವನಲ್ಲಿ
ಪ್ರಾರ್ಥಿಸುತ್ತೇನೆ” ಎಂದು ಹೇಳಿದನು.

6ಇಸ್ರೇಲರೆಲ್ಲರು ಮಿಚ್ಪೆಯಲ್ಲಿ ಒಟ್ಟುಗೂಡಿದರು.
ಅವರು ನೀರನ್ನು ತೆಗೆದುಕೊಂಡು ಬಂದು ಯೆಹೋವನ
ಮುಂದೆ ಅದನ್ನು ಸುರಿದರು. ಈ ರೀತಿ ಅಂದು ಅವರು
ಉಪವಾಸವನ್ನು ಆರಂಭಿಸಿದರು. ಅಂದು ಅವರು ಯಾವ
ಆಹಾರವನ್ನೂ ತೆಗೆದುಕೊಳ್ಳಲಿಲ್ಲ. ಅಲ್ಲದೆ ಅವರು ತಮ್ಮ
ಪಾಪಗಳನ್ನು ಅರಿಕೆ ಮಾಡಿದರು. “ನಾವು ಯೆಹೋವ
ನಿಗೆ ವಿರುದ್ಧವಾಗಿ ಪಾಪ ಮಾಡಿದ್ದೇವೆ” ಎಂದು ಅವರು
ಹೇಳಿದರು. ಹೀಗಿರಲು, ಸಮುವೇಲನು ಇಸ್ರೇಲರ
ನ್ಯಾಯಾಧೀಶನಾಗಿ ಮಿಚ್ಪೆಯಲ್ಲಿ ಸೇವೆ ಸಲ್ಲಿಸಿದನು.

7ಇಸ್ರೇಲರೆಲ್ಲರು ಮಿಚ್ಪೆಯಲ್ಲಿ ಒಟ್ಟುಗೂಡಿರುವುದು
ಫಿಲಿಷ್ಟಿಯರಿಗೆ ಗೊತ್ತಾಯಿತು. ಫಿಲಿಷ್ಟಿಯ ಅಧಿಪತಿಗಳು
ಇಸ್ರೇಲರ ವಿರುದ್ಧ ಹೋರಾಡಲು ಹೊರಟರು ಫಿಲಿಷ್ಟಿ
ಯರು ಬರುತ್ತಿರುವುದನ್ನು ಕೇಳಿ ಇಸ್ರೇಲರು ಭಯ
ಗೊಂಡರು. 8ಇಸ್ರೇಲರು ಸಮುವೇಲನಿಗೆ, “ನಮ್ಮ

---

**ಈ ಪವಿತ್ರ … ಯಾಜಕನೆಲ್ಲಿದ್ದಾನೆ?** ಅಕ್ಷರಶಃ ಹೀಬ್ರೂವಿನಲ್ಲಿ “ಪವಿತ್ರನೂ ಯೆಹೋವನೂ ಆಗಿರುವ ದೇವರ ಮುಂದೆ ಯಾರು ನಿಂತುಕೊಳ್ಳಬಲ್ಲರು?”

ದೇವರಾದ ಯೆಹೋವನಲ್ಲಿ ನಮಗಾಗಿ ಪ್ರಾರ್ಥಿಸು!
ನಿಲ್ಲಿಸಬೇಡ! ಫಿಲಿಷ್ಟಿಯರಿಂದ ನಮ್ಮನ್ನು ರಕ್ಷಿಸಲು
ಯೆಹೋವನಲ್ಲಿ ಬೇಡಿಕೋ!'' ಎಂದು ಹೇಳಿದರು.
9ಸಮುವೇಲನು ಕುರಿಮರಿಯೊಂದನ್ನು ತಂದು
ಯೆಹೋವನಿಗೆ ಸರ್ವಾಂಗಹೋಮವನ್ನಾಗಿ ಅರ್ಪಿಸಿ
ದನು. ಸಮುವೇಲನು ಇಸ್ರೇಲರಿಗಾಗಿ ಯೆಹೋವನಲ್ಲಿ
ಪ್ರಾರ್ಥಿಸಿದನು. ಯೆಹೋವನು ಸಮುವೇಲನ ಪ್ರಾರ್ಥ
ನೆಗೆ ಉತ್ತರಿಸಿದನು. 10ಸಮುವೇಲನು ಕುರಿಮರಿಯನ್ನು
ಸಮರ್ಪಿಸುವಾಗ, ಫಿಲಿಷ್ಟಿಯರು ಇಸ್ರೇಲರೊಡನೆ
ಹೋರಾಡಲು ಬಂದರು. ಆದರೆ ಯೆಹೋವನು ಫಿಲಿಷ್ಟಿ
ಯರ ಹತ್ತಿರ ದೊಡ್ಡ ಗುಡುಗನ್ನು ಉಂಟುಮಾಡಿದನು.
ಗುಡುಗಿನ ಶಬ್ದವು ಫಿಲಿಷ್ಟಿಯರಲ್ಲಿ ಕಳವಳವನ್ನೂ
ಭಯವನ್ನೂ ಉಂಟುಮಾಡಿತು. ಅವರ ಸೇನಾಧಿಪತಿ
ಗಳಿಗೆ ಅವರನ್ನು ಹತೋಟಿಯಲ್ಲಿಡಲಾಗಲಿಲ್ಲ. ಆದ
ಕಾರಣ ಇಸ್ರೇಲರು ಫಿಲಿಷ್ಟಿಯರನ್ನು ಯುದ್ಧದಲ್ಲಿ
ಸೋಲಿಸಿದರು. 11ಇಸ್ರೇಲರು ಮಿಚ್ಪೆಯಿಂದ ಬಂದು
ಫಿಲಿಷ್ಟಿಯರನ್ನು ದಾರಿಯುದ್ದಕ್ಕೂ ಸಂಹರಿಸುತ್ತಾ ಬೇತ್ಕರಿ
ನವರೆಗೆ ಅಟ್ಟಿಸಿಕೊಂಡು ಹೋದರು.

### ಇಸ್ರೇಲಿನಲ್ಲಿ ಶಾಂತಿ ಸ್ಥಾಪನೆ

12ಅನಂತರ ಸಮುವೇಲನು ವಿಶೇಷವಾದ ಕಲ್ಲನ್ನು
ನೆಡಿಸಿದನು. ಯೆಹೋವನು ಮಾಡಿದ ಕಾರ್ಯಗಳನ್ನು
ಜನರು ಜ್ಞಾಪಿಸಿಕೊಳ್ಳುತ್ತಿರಲಿ ಎಂಬುದಕ್ಕಾಗಿ ಅವನು ಈ
ರೀತಿ ಮಾಡಿದನು. ಸಮುವೇಲನು ಮಿಚ್ಪೆ ಮತ್ತು ಶೇನಿಗಳ
ಮಧ್ಯೆ ಕಲ್ಲನ್ನು ನೆಟ್ಟು, ''ಯೆಹೋವನು ಇಲ್ಲಿಯವರೆಗೂ
ನಮಗೆ ಸಹಾಯ ಮಾಡಿದನು'' ಎಂದು ಹೇಳಿ, ಅದಕ್ಕೆ
''ಸಹಾಯದ ಕಲ್ಲು'' ಎಂದು ಹೆಸರಿಟ್ಟನು.
13ಫಿಲಿಷ್ಟಿಯರು ಸೋತುಹೋದರು. ಅವರು ಮತ್ತೆ
ಇಸ್ರೇಲರ ಭೂಮಿಯಲ್ಲಿ ಹೆಜ್ಜೆ ಇಡಲಿಲ್ಲ. ಸಮುವೇಲನ
ಜೀವಿತದ ಉಳಿದ ಭಾಗದಲ್ಲಿ ಯೆಹೋವನು ಫಿಲಿಷ್ಟಿ
ಯರಿಗೆ ವಿರುದ್ಧವಾಗಿದ್ದನು. 14ಫಿಲಿಷ್ಟಿಯರು ಎಕ್ರೋನ್
ನಿಂದ ಗತ್‌ವರೆಗಿನ ಪ್ರದೇಶದ ಇಸ್ರೇಲ್ ಪಟ್ಟಣಗಳನ್ನು
ವಶಪಡಿಸಿಕೊಂಡಿದ್ದರು. ಆದರೆ ಇಸ್ರೇಲರು ಆ ಪಟ್ಟಣ
ಗಳನ್ನು ಮರಳಿ ಗೆದ್ದುಕೊಂಡರು ಮತ್ತು ಆ ಪಟ್ಟಣದ
ಸುತ್ತಲಿನ ಪ್ರದೇಶಗಳನ್ನು ವಶಪಡಿಸಿಕೊಂಡರು.
ಇಸ್ರೇಲರ ಮತ್ತು ಅಮೋರಿಯರ ಮಧ್ಯೆ ಶಾಂತಿ
ನೆಲೆಸಿತ್ತು.
15ಸಮುವೇಲನು ತನ್ನ ಜೀವಮಾನವೆಲ್ಲಾ ಇಸ್ರೇಲ
ರನ್ನು ಮುನ್ನಡೆಸಿದನು; 16ಇಸ್ರೇಲಿನಲ್ಲಿ ನ್ಯಾಯ ಪರಿ
ಪಾಲನೆಗಾಗಿ ಪ್ರತಿವರ್ಷವೂ ಬೇತೇಲ್, ಗಿಲ್ಗಾಲ್ ಮತ್ತು
ಮಿಚ್ಪೆಗಳಿಗೆ ಹೋದನು. ಹೀಗೆ ಅವನು ಈ ಸ್ಥಳಗಳಲ್ಲೆಲ್ಲಾ
ಇಸ್ರೇಲರಿಗೆ ನ್ಯಾಯತೀರಿಸುತ್ತಾ ಅವರನ್ನು ಆಳಿದನು.
17ಆದರೆ ಸಮುವೇಲನ ಮನೆಯು ರಾಮದಲ್ಲಿತ್ತು. ಆದ್ದ
ರಿಂದ ಸಮುವೇಲನು ಯಾವಾಗಲೂ ರಾಮಕ್ಕೆ ಹಿಂತಿರು
ಗುತ್ತಿದ್ದನು. ಸಮುವೇಲನು ರಾಮದಿಂದ ಇಸ್ರೇಲರಿಗೆ
ನ್ಯಾಯತೀರ್ಪು ನೀಡುತ್ತಾ ಆಳಿದನು; ರಾಮ
ದಲ್ಲಿ ಯೆಹೋವನಿಗಾಗಿ ಯಜ್ಞವೇದಿಕೆಯೊಂದನ್ನು
ನಿರ್ಮಿಸಿದನು.

### ಇಸ್ರೇಲರು ತಮಗೊಬ್ಬ ರಾಜನನ್ನು ಕೇಳಿಕೊಳ್ಳುವರು

8 ಸಮುವೇಲನು ಮುದುಕನಾದ ಮೇಲೆ ತನ್ನ
ಮಕ್ಕಳನ್ನು ಇಸ್ರೇಲರಿಗೆ ನ್ಯಾಯಾಧೀಶರನ್ನಾಗಿ
ಮಾಡಿದನು. 2ಅವನ ಮೊದಲನೆಯ ಮಗ ಯೋವೇಲ್,
ಎರಡನೆಯ ಮಗ ಅಬೀಯ. ಯೋವೇಲನು ಮತ್ತು
ಅಬೀಯನು ಬೇರ್ಷೆಬದಲ್ಲಿ ನ್ಯಾಯಾಧೀಶರಾಗಿದ್ದರು.
3ಆದರೆ ಸಮುವೇಲನ ಮಕ್ಕಳು ಅವನಂತೆ ನಡೆದುಕೊಳ್ಳ
ಲಿಲ್ಲ. ಅವರು ಲಂಚವನ್ನು ಪಡೆದು ನ್ಯಾಯಾಲಯದಲ್ಲಿ
ಅನ್ಯಾಯದ ತೀರ್ಪುಗಳನ್ನು ಮಾಡುತ್ತಿದ್ದರು ಮತ್ತು
ಜನರನ್ನು ವಂಚಿಸುತ್ತಿದ್ದರು. 4ಆದುದರಿಂದ ಇಸ್ರೇಲರ
ಹಿರಿಯರೆಲ್ಲ ಒಟ್ಟುಗೂಡಿದರು. ಅವರು ಸಮುವೇಲ
ನನ್ನು ಭೇಟಿಮಾಡಲು ರಾಮಕ್ಕೆ ಹೋದರು. 5ಹಿರಿಯರು
ಸಮುವೇಲನಿಗೆ, ''ನೀನು ಮುದುಕನಾಗಿರುವೆ ಮತ್ತು
ನಿನ್ನ ಮಕ್ಕಳು ಒಳ್ಳೆಯ ಮಾರ್ಗದಲ್ಲಿ ನಡೆಯುತ್ತಿಲ್ಲ,
ಅವರು ನಿನ್ನಂತಲ್ಲ. ಈಗ, ಬೇರೆ ದೇಶಗಳಂತೆ ಒಬ್ಬ ರಾಜ
ನನ್ನು ನಮ್ಮನ್ನಾಳಲು ನೇಮಿಸು'' ಎಂದು ಹೇಳಿದರು.
6ಹೀಗೆ ಹಿರಿಯರೆಲ್ಲರು ತಮ್ಮನ್ನು ಮುನ್ನಡೆಸಲು
ರಾಜನೊಬ್ಬನು ಬೇಕೆಂದರು. ಸಮುವೇಲನಿಗೆ ಇದು
ಸರಿಯೆನಿಸಲಿಲ್ಲ. ಆದ್ದರಿಂದ ಅವನು ಯೆಹೋವನಲ್ಲಿ
ಪ್ರಾರ್ಥಿಸಿದನು. 7ಯೆಹೋವನು ಅವನಿಗೆ, ''ಪ್ರಜೆಗಳು
ನಿನಗೆ ಹೇಳಿದಂತೆ ಮಾಡು. ಅವರು ನಿನ್ನನ್ನು ತಿರಸ್ಕರಿಸ
ಲಿಲ್ಲ. ಆದರೆ ನನ್ನನ್ನು ತಿರಸ್ಕರಿಸಿದ್ದಾರೆ! ಅವರಿಗೆ ನಾನು
ರಾಜನಾಗಿರುವುದು ಬೇಕಿಲ್ಲ! 8ಅವರು ಯಾವಾಗಲೂ
ಮಾಡಿದಂತೆ ಈಗಲೂ ಮಾಡುತ್ತಿದ್ದಾರೆ. ಅವರನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದೆನು. ಆದರೆ ಅವರು
ನನ್ನನ್ನು ಬಿಟ್ಟು ಅನ್ಯದೇವತೆಗಳ ಸೇವೆ ಮಾಡಿದರು.
ಅವರು ನಿನಗೂ ಹೀಗೆಯೇ ಮಾಡುತ್ತಿದ್ದಾರೆ. 9ಆದ್ದರಿಂದ
ಜನರ ಮಾತಿಗೆ ಕಿವಿಗೊಟ್ಟು ಅವರು ಹೇಳಿದಂತೆ ಮಾಡು.
ಆದರೆ ಅವರಿಗೆ ಎಚ್ಚರಿಕೆ ಕೊಡು. ರಾಜನಾದವನು
ಜನರಿಗೆ ಏನು ಮಾಡುತ್ತಾನೆ ಎಂಬುದನ್ನು ಅವರಿಗೆ ತಿಳಿಸಿ
ಹೇಳು! ರಾಜನಾದವನು ಜನರನ್ನು ಹೇಗೆ ಆಳುತ್ತಾನೆಂಬು
ದನ್ನೂ ಅವರಿಗೆ ತಿಳಿಸಿಕೊಡು'' ಎಂದು ಹೇಳಿದನು.
10ಆ ಜನರು ರಾಜನೊಬ್ಬನನ್ನು ಕೇಳಿಕೊಂಡರು.
ಆದ್ದರಿಂದ ಸಮುವೇಲನು ಅವರಿಗೆ ಯೆಹೋವನು ಹೇಳಿ
ದ್ದನ್ನೆಲ್ಲ ತಿಳಿಸಿದನು. 11ಸಮುವೇಲನು, ''ನೀವು ನಿಮ್ಮನ್ನು
ಆಳಲು ರಾಜನು ಬೇಕೆಂದರೆ, ಅವನು ಬಲವಂತದಿಂದ
ಹೀಗೆಲ್ಲ ಮಾಡುತ್ತಾನೆ: ಅವನು ನಿಮ್ಮ ಗಂಡುಮಕ್ಕಳನ್ನು

ತೆಗೆದುಕೊಂಡು ತನ್ನ ಸೇವಕರನ್ನಾಗಿಯೂ ಸೈನಿಕರ
ನ್ನಾಗಿಯೂ ಮಾಡಿಕೊಳ್ಳುವನು. ಅವರು ಅವನ ರಥಸೈನ್ಯ
ದಲ್ಲಿಯೂ ಅಶ್ವಸೈನ್ಯದಲ್ಲಿಯೂ ಸೇರಿ ಹೋರಾಡ
ಬೇಕಾಗುತ್ತದೆ. ನಿನ್ನ ಮಕ್ಕಳು ರಾಜನ ರಥದ ಮುಂದೆ
ಓಡುವ ಬೆಂಗಾವಲಿನವರಾಗಬೇಕಾಗುತ್ತದೆ. 12ರಾಜನು
ನಿಮ್ಮ ಮಕ್ಕಳನ್ನು ಯೋಧರನ್ನಾಗಿ ಮಾಡಿಕೊಳ್ಳುವನು.
ಅವರಲ್ಲಿ ಕೆಲವರು ಒಂದು ಸಾವಿರ ಮಂದಿ ಸೈನಿಕರಿಗೆ
ಅಧಿಕಾರಿಗಳಾಗಬಹುದು. ಇನ್ನು ಕೆಲವರು ಐವತ್ತು
ಮಂದಿ ಸೈನಿಕರಿಗೆ ಅಧಿಕಾರಿಗಳಾಗಬಹುದು. ತನ್ನ
ಭೂಮಿಯನ್ನು ಉಳಲು ಮತ್ತು ಪೈರನ್ನು ಕೊಯ್ಯಲು
ರಾಜನು ನಿಮ್ಮ ಮಕ್ಕಳನ್ನು ತೆಗೆದುಕೊಳ್ಳುವನು;
ಯುದ್ಧದ ಆಯುಧಗಳನ್ನು ತಯಾರಿಸಲೂ ತನ್ನ ರಥಕ್ಕೆ
ಬೇಕಾದ ಸಾಮಗ್ರಿಗಳನ್ನು ತಯಾರಿಸಲೂ ಅವನು
ಅವರನ್ನು ಬಳಸಿಕೊಳ್ಳುವನು.

13‘‘ರಾಜನು ನಿಮ್ಮ ಹೆಣ್ಣುಮಕ್ಕಳನ್ನು ತೆಗೆದುಕೊಂಡು
ತನಗಾಗಿ ಸುಗಂಧದ್ರವ್ಯಗಳನ್ನು ತಯಾರಿಸಲೂ ಅಡಿಗೆ
ಮಾಡಲೂ ರೊಟ್ಟಿಸುಡುವುದಕ್ಕೂ ಇಟ್ಟುಕೊಳ್ಳುವನು.

14‘‘ನಿಮಗೆ ಸೇರಿದ ಉತ್ತಮ ಹೊಲಗಳನ್ನೂ ದ್ರಾಕ್ಷಿ
ತೋಟಗಳನ್ನೂ ಆಲಿವ್ ತೋಪುಗಳನ್ನೂ ರಾಜನು ಕಿತ್ತು
ಕೊಂಡು ತನ್ನ ಅಧಿಕಾರಿಗಳಿಗೆ ಕೊಡುತ್ತಾನೆ. 15ನೀವು
ಬೆಳೆದ ಧಾನ್ಯಗಳಲ್ಲಿ ಮತ್ತು ದ್ರಾಕ್ಷಿಗಳಲ್ಲಿ ಅವನು ಹತ್ತನೆ
ಒಂದು ಭಾಗವನ್ನು ತೆಗೆದುಕೊಂಡು ತನ್ನ ಅಧಿಕಾರಿ
ಗಳಿಗೂ ಸೇವಕರಿಗೂ ಕೊಡುತ್ತಾನೆ. 16ರಾಜನು, ನಿಮ್ಮ
ಸೇವಕಸೇವಕಿಯರನ್ನು ತೆಗೆದುಕೊಳ್ಳುವನು; ಶ್ರೇಷ್ಠವಾದ
ಎತ್ತುಗಳನ್ನೂ ಕತ್ತೆಗಳನ್ನೂ ತೆಗೆದುಕೊಂಡು ತನ್ನ ಕೆಲಸ
ಕ್ಕಾಗಿ ಬಳಸಿಕೊಳ್ಳುವನು. 17ನಿಮ್ಮ ಕುರಿಹಿಂಡುಗಳಲ್ಲಿ
ಹತ್ತನೆಯ ಒಂದು ಭಾಗವನ್ನು ತೆಗೆದುಕೊಳ್ಳುವನು.

‘‘ಆಗ ನೀವು ರಾಜನಿಗೆ ಸೇವಕರಾಗುವಿರಿ; 18ರಾಜನು
ಬೇಕೆಂದು ಕೇಳಿಕೊಂಡದ್ದಕ್ಕಾಗಿ ಗೋಳಾಡುವಿರಿ. ಆದರೆ
ಆಗ ಯೆಹೋವನು ನಿಮಗೆ ಉತ್ತರಿಸುವುದಿಲ್ಲ’’ ಎಂದು
ಹೇಳಿದನು.

19ಆದರೆ ಸಮುವೇಲನ ಮಾತುಗಳಿಗೆ ಜನರು ಕಿವಿ
ಗೊಡಲಿಲ್ಲ. ಅವರು, ‘‘ಇಲ್ಲ, ನಮ್ಮನ್ನಾಳಲು ಒಬ್ಬ
ರಾಜನು ಇರಲೇಬೇಕು. 20ಆಗ ನಾವು ಇತರ ಅನ್ಯ
ಜನಾಂಗಗಳಂತೆ ಆಗುವೆವು. ನಮ್ಮ ರಾಜನು ನಮ್ಮನ್ನು
ಮುನ್ನಡೆಸುವನು. ಅವನು ನಮ್ಮೊಡನೆ ಬಂದು ನಮ
ಗೋಸ್ಕರ ಹೋರಾಡುವನು’’ ಎಂದು ಹೇಳಿದರು.

21ಸಮುವೇಲನು ಅವರ ಮಾತುಗಳನ್ನೆಲ್ಲಾ ಯೆಹೋವ
ನಿಗೆ ತಿಳಿಸಿದನು. 22ಯೆಹೋವನು, ‘‘ಅವರ ಇಷ್ಟದಂತೆ
ಅವರಿಗೊಬ್ಬ ರಾಜನನ್ನು ನೇಮಿಸು’’ ಎಂದು ಹೇಳಿದನು.

ಆಗ ಸಮುವೇಲನು ಇಸ್ರೇಲರಿಗೆ, ‘‘ಹಾಗೆಯೇ ಆಗಲಿ,
ನೀವು ಒಬ್ಬ ಹೊಸ ರಾಜನನ್ನು ಪಡೆದುಕೊಳ್ಳುವಿರಿ. ಈಗ
ನೀವೆಲ್ಲ ನಿಮ್ಮ ಮನೆಗಳಿಗೆ ಹಿಂದಿರುಗಿರಿ’’ ಎಂದನು.

### ಸೌಲನು ತನ್ನ ತಂದೆಯ ಕತ್ತೆಗಳನ್ನು ಹುಡುಕುವನು

9 ಬೆನ್ಯಾಮೀನ್ ಕುಲದ ಕೀಷನು ಒಬ್ಬ ಪ್ರಮುಖ
ವ್ಯಕ್ತಿಯಾಗಿದ್ದನು. ಕೀಷನು ಅಬೀಯೇಲನ ಮಗ.
ಅಬೀಯೇಲನು ಚೆರೋರನ ಮಗ. ಚೆರೋರನು
ಬೆಕೋರತನ ಮಗ. ಬೆಕೋರತನು ಅಫೀಹನ ಮಗ.
ಇವರೆಲ್ಲರು ಬೆನ್ಯಾಮೀನನ ಕುಲಕ್ಕೆ ಸೇರಿದವರು.
2ಕೀಷನಿಗೆ ಸೌಲನೆಂಬ ಹೆಸರುಳ್ಳ ಒಬ್ಬ ಮಗನಿದ್ದನು.
ಸೌಲನು ಸುಂದರನಾದ ಯುವಕನಾಗಿದ್ದನು. ಸೌಲನಿ
ಗಿಂತ ಸುಂದರರು ಅಲ್ಲಿರಲಿಲ್ಲ. ಸೌಲನು ಇತರ ಇಸ್ರೇಲ್
ಗಂಡಸರಿಗಿಂತ ಎತ್ತರವಾಗಿದ್ದನು.

3ಒಂದು ದಿನ ಕೀಷನ ಕತ್ತೆಗಳು ಕಳೆದು ಹೋದವು.
ಆದ್ದರಿಂದ ಕೀಷನು ಸೌಲನಿಗೆ, ‘‘ಸೇವಕ ನೊಬ್ಬನನ್ನು
ಕರೆದುಕೊಂಡು ಕತ್ತೆಗಳನ್ನು ಹುಡುಕಲು ಹೋಗು’’
ಎಂದು ಹೇಳಿದನು. 4ಸೌಲನು ಕತ್ತೆಗಳನ್ನು ಹುಡುಕಲು
ಆರಂಭಿಸಿದನು. ಸೌಲನು ಮತ್ತು ಅವನ ಸೇವಕನು
ಎಫ್ರಾಯೀಮ್ ಬೆಟ್ಟಪ್ರದೇಶದಲ್ಲಿ ಹುಡುಕಿದರೂ
ಅವರಿಗೆ ಹೆಸರಕತ್ತೆಗಳು ಸಿಗಲಿಲ್ಲ. ಆದ್ದರಿಂದ ಅವರು
ಶಾಲೀಮ್ ಪ್ರದೇಶದಲ್ಲೆಲ್ಲಾ ಹುಡುಕಿ ದರು; ಅಲ್ಲಿಯೂ
ಅವರ ಕತ್ತೆಗಳು ಸಿಕ್ಕಲಿಲ್ಲ. ಆದ್ದರಿಂದ ಅವರು ಬೆನ್ಯಾ
ಮೀನನ ಪ್ರದೇಶದಲ್ಲೆಲ್ಲಾ ಹುಡುಕಿದರು; ಅಲ್ಲಿಯೂ
ಅವರ ಕತ್ತೆಗಳು ಸಿಗಲಿಲ್ಲ.

5ಕೊನೆಗೆ, ಸೌಲನು ಮತ್ತು ಅವನ ಸೇವಕನು ಚೂಫ್
ಎಂಬ ಹೆಸರಿನ ಪಟ್ಟಣಕ್ಕೆ ಬಂದರು. ಸೌಲನು ಸೇವಕನಿಗೆ,
‘‘ನಾವು ಮರಳಿ ಹೋಗೋಣ. ನಮ್ಮ ತಂದೆಯು
ಹೆಸರಕತ್ತೆಗಳ ಬಗ್ಗೆ ಯೋಚಿಸುವುದನ್ನು ಬಿಟ್ಟು ನಮ್ಮ ಬಗ್ಗೆ
ಚಿಂತಿಸಲಾರಂಭಿಸುತ್ತಾನೆ’’ ಎಂದು ಹೇಳಿದನು.

6ಆದರೆ ಆ ಸೇವಕನು, ‘‘ಈ ಪಟ್ಟಣದಲ್ಲಿ ಒಬ್ಬ ದೇವರ
ಮನುಷ್ಯನಿದ್ದಾನೆ. ಜನರು ಅವನನ್ನು ಗೌರವಿಸುತ್ತಾರೆ.
ಅವನು ಹೇಳುವ ವಿಷಯಗಳೆಲ್ಲ ನಿಜವಾಗುತ್ತವೆ. ಆದ್ದ
ರಿಂದ ಈ ಪಟ್ಟಣಕ್ಕೆ ಹೋಗೋಣ. ಬಹುಶಃ ನಾವು
ಮುಂದೆ ಎಲ್ಲಿಗೆ ಹೋಗಬೇಕೆಂಬುದನ್ನು ಈ ದೇವರ
ಮನುಷ್ಯನು ತಿಳಿಸಬಹುದು’’ ಎಂದು ಉತ್ತರಿಸಿದನು.

7ಸೌಲನು ತನ್ನ ಸೇವಕನಿಗೆ, ‘‘ನಾವು ಪಟ್ಟಣದೊಳಗೆ
ಹೋಗೋಣ ಯಾಕಂದರೆ ಆ ಮನುಷ್ಯನಿಗೆ ಕೊಡಲು
ನಮ್ಮಲ್ಲಿ ಏನೂ ಇಲ್ಲ. ನಮ್ಮ ಚೀಲದಲ್ಲಿದ್ದ ಆಹಾರವೆಲ್ಲ
ಮುಗಿದಿದೆ. ಆ ದೇವರ ಮನುಷ್ಯನಿಗೆ ನೀಡಲು ನಮ್ಮಲ್ಲಿ
ಕಾಣಿಕೆಯೂ ಇಲ್ಲ. ಹೀಗಾಗಿ ನಾವು ಅವನಿಗೆ ಏನು
ಕೊಡಬೇಕು?’’ ಎಂದು ಕೇಳಿದನು.

8ಆ ಸೇವಕನು ಸೌಲನಿಗೆ, ‘‘ಇಲ್ಲಿ ನೋಡು, ನನ್ನ ಬಳಿ
ಸ್ವಲ್ಪ ಹಣವಿದೆ. ಇದನ್ನು ಆ ದೇವರ ಮನುಷ್ಯನಿಗೆ
ಕೊಡೋಣ. ನಾವು ಎಲ್ಲಿಗೆ ಹೋಗಬೇಕೆಂಬುದನ್ನು
ಅವನು ತಿಳಿಸುತ್ತಾನೆ’’ ಎಂದು ಉತ್ತರಿಸಿದನು.

9-11ಸೌಲನು ತನ್ನ ಸೇವಕನಿಗೆ, ''ಒಳ್ಳೆಯ ಆಲೋಚನೆ; ನಡೆ ಹೋಗೋಣ'' ಎಂದು ಹೇಳಿದನು. ಅವರು ಆ ಪಟ್ಟಣದಲ್ಲಿ ದೇವರ ಮನುಷ್ಯನಿದ್ದಲ್ಲಿಗೆ ಹೋದರು.

ಸೌಲನು ಮತ್ತು ಆ ಸೇವಕನು ಬೆಟ್ಟದ ಮೇಲೆ ನಡೆಯುತ್ತಾ ಆ ಪಟ್ಟಣಕ್ಕೆ ಹೋದರು. ಆ ದಾರಿಯಲ್ಲಿ ಅವರು ಕೆಲವು ಸ್ತ್ರೀಯರನ್ನು ಸಂಧಿಸಿದರು. ಆ ಸ್ತ್ರೀಯರು ನೀರನ್ನು ತರಲು ಹೋಗುತ್ತಿದ್ದರು. ಸೌಲನು ಮತ್ತು ಆ ಸೇವಕನು, ''ದರ್ಶಿಯು ಇಲ್ಲಿರುವನೇ?'' ಎಂದು ಆ ಯುವತಿಯರನ್ನು ಕೇಳಿದರು: (ಹಿಂದಿನ ಕಾಲದಲ್ಲಿ ಇಸ್ರೇಲರು ಪ್ರವಾದಿಯನ್ನು ''ದರ್ಶಿ'' ಎಂದು ಕರೆಯುತ್ತಿದ್ದರು. ದೇವರಿಂದ ಏನಾದರೂ ಕೇಳಬೇಕಾಗಿದ್ದರೆ, ''ದರ್ಶಿಯ ಬಳಿಗೆ ಹೋಗೋಣ'' ಎನ್ನುತ್ತಿದ್ದರು.)

12ಆ ಯುವತಿಯರು, ''ಹೌದು ದರ್ಶಿಯು ಇಲ್ಲಿದ್ದಾನೆ. ಅವನು ದಾರಿಯಲ್ಲಿ ನಿಮಗಿಂತ ಸ್ವಲ್ಪ ಮುಂದೆ ಹೋಗುತ್ತಿದ್ದಾನೆ. ಈ ಹೊತ್ತು ನಮ್ಮ ಊರಿನವರು ಗುಡ್ಡದ ಮೇಲೆ ಯಜ್ಞವನ್ನು ಅರ್ಪಿಸುವುದರಿಂದ ಅವನು
ಇಲ್ಲಿಗೆ ಬಂದಿದ್ದಾನೆ. 13ನೀವು ಪಟ್ಟಣದೊಳಕ್ಕೆ ಹೋದರೆ
ಅವನನ್ನು ಕಾಣಬಹುದು. ನೀವು ಬೇಗನೆ ನೋಡಬೇಕೆಂದಿದ್ದರೆ, ಅವನು ಊಟ ಮಾಡುವುದಕ್ಕಾಗಿ ಆರಾಧನೆಯ ಸ್ಥಳಕ್ಕೆ ಹೋಗುವುದಕ್ಕಿಂತ ಮೊದಲೇ ಅವನನ್ನು ಕಾಣಬೇಕು. ದರ್ಶಿಯು ಯಜ್ಞವನ್ನು ಆಶೀರ್ವದಿಸಬೇಕಾಗಿರುವುದರಿಂದ ಅವನು ಅಲ್ಲಿಗೆ ಹೋಗುವವರೆಗೆ ಜನರು ಊಟಮಾಡುವುದಿಲ್ಲ. ಆದ್ದರಿಂದ ನೀವು ಬೇಗನೆ ಹೋದರೆ ಅವನನ್ನು ಕಾಣಬಹುದು'' ಎಂದು ಹೇಳಿದರು.

14ಸೌಲನು ಮತ್ತು ಆ ಸೇವಕನು ಗುಡ್ಡವನ್ನು ಹತ್ತಿ ಪಟ್ಟಣದ ಕಡೆ ನಡೆದರು. ಅವರು ಪಟ್ಟಣವನ್ನು ಪ್ರವೇಶಿಸುತ್ತಿದ್ದಾಗ, ಸಮುವೇಲನು ಅವರ ಕಡೆ ಬರುತ್ತಿರುವುದನ್ನು ಕಂಡರು. ಸಮುವೇಲನು ಆಗತಾನೇ ಪಟ್ಟಣದಿಂದ ಹೊರಬಂದು, ಆರಾಧನೆಯ ಸ್ಥಳದ ಕಡೆ ಹೊರಟಿದ್ದನು.

15ಹಿಂದಿನ ದಿನ, ಯೆಹೋವನು ಸಮುವೇಲನಿಗೆ,
16''ನಾಳೆ ಇದೇ ಸಮಯಕ್ಕೆ ನಾನು ನಿನ್ನ ಬಳಿಗೆ ಒಬ್ಬ ಮನುಷ್ಯನನ್ನು ಕಳುಹಿಸುತ್ತೇನೆ. ಅವನು ಬೆನ್ಯಾಮೀನ್ ಕುಟುಂಬಕ್ಕೆ ಸೇರಿದವನು. ನೀನು ಅವನನ್ನು ಅಭಿಷೇಕಿಸು. ನನ್ನ ಜನರಾದ ಇಸ್ರೇಲರಿಗೆ ಅವನು ರಾಜನಾಗುತ್ತಾನೆ. ಈ ಮನುಷ್ಯನು ನನ್ನ ಜನರನ್ನು ಫಿಲಿಷ್ಟಿಯರಿಂದ ರಕ್ಷಿಸುತ್ತಾನೆ. ನನ್ನ ಜನರ ಸಂಕಟವನ್ನು ನಾನು ನೋಡಿದ್ದೇನೆ; ನನ್ನ ಜನರ ಗೋಳನ್ನು ನಾನು ಆಲಿಸಿದ್ದೇನೆ'' ಎಂದು ತಿಳಿಸಿದ್ದನು.

17ಸಮುವೇಲನು ಸೌಲನನ್ನು ಕಂಡಾಗ ಯೆಹೋವನು ಅವನಿಗೆ, ''ನಾನು ನಿನಗೆ ಹೇಳಿದ ಮನುಷ್ಯ ಇವನೇ. ಇವನು ನನ್ನ ಜನರನ್ನು ಆಳುತ್ತಾನೆ'' ಎಂದು ಹೇಳಿದನು.

18ಸೌಲನು ಹೊರಬಾಗಿಲಿನ ಬಳಿಯಿದ್ದ ಸಮುವೇಲನ ಬಳಿಗೆ ಬಂದನು. ಸೌಲನು ಸಮುವೇಲನನ್ನು, ''ದರ್ಶಿಯ ಮನೆ ಎಲ್ಲಿದೆ? ಎಂಬುದನ್ನು ದಯವಿಟ್ಟು ನನಗೆ ಹೇಳಿ'' ಎಂದು ಕೇಳಿದನು.

19ಸಮುವೇಲನು, ''ನಾನೇ ಆ ದರ್ಶಿ. ನನ್ನೊಡನೆ ಆರಾಧನೆಯ ಸ್ಥಳಕ್ಕೆ ಬಾ. ನೀನು ಮತ್ತು ನಿನ್ನ ಸೇವಕ ಈ ದಿನ ನನ್ನ ಜೊತೆಯಲ್ಲಿ ಊಟಮಾಡಬೇಕು. ನಾನು ನಿಮ್ಮನ್ನು ನಾಳೆ ಬೆಳಿಗ್ಗೆ ನಿಮ್ಮ ಮನೆಗೆ ಕಳುಹಿಸುತ್ತೇನೆ.
ನಿಮ್ಮ ಪ್ರಶ್ನೆಗಳಿಗೆಲ್ಲ ಉತ್ತರ ಕೊಡುತ್ತೇನೆ. 20ಮೂರು
ದಿನಗಳ ಹಿಂದೆ ಕಳೆದುಹೋದ ನಿನ್ನ ಕತ್ತೆಗಳಿಗಾಗಿ ಚಿಂತಿಸಬೇಡ. ಅವುಗಳೆಲ್ಲ ಸಿಕ್ಕಿವೆ. ಈಗ ಇಸ್ರೇಲರಿಗೆಲ್ಲ ನೀನು ಬೇಕಾಗಿರುವೆ. ಅವರಿಗೆ ನೀನು ಮತ್ತು ನಿನ್ನ ತಂದೆಯ ಕುಟುಂಬದ ಜನರೆಲ್ಲ ಬೇಕಾಗಿದ್ದಾರೆ'' ಎಂದು ಹೇಳಿದನು.

21ಅದಕ್ಕೆ ಸೌಲನು, ''ನಾನು ಬೆನ್ಯಾಮೀನ್ ಕುಲದವನು. ಅದು ಇಸ್ರೇಲರಲ್ಲಿ ಒಂದು ಚಿಕ್ಕ ಕುಲ. ನನ್ನ ಕುಟುಂಬವು ಬೆನ್ಯಾಮೀನ್ ಕುಲದಲ್ಲಿ ತೀರ ಕನಿಷ್ಠವಾದುದು. ಇಸ್ರೇಲರಿಗೆ ನಾನು ಬೇಕಾಗಿದ್ದೇನೆ ಎಂದು ಏಕೆ ಹೇಳುತ್ತಿರುವೆ?'' ಎಂದು ಕೇಳಿದನು.

22ಆಗ ಸಮುವೇಲನು ಸೌಲನನ್ನು ಮತ್ತು ಅವನ ಸೇವಕನನ್ನು ಊಟದ ಸ್ಥಳಕ್ಕೆ ಕರೆದುಕೊಂಡು ಹೋದನು. ಒಟ್ಟಿಗೆ ಊಟಮಾಡಲು ಮತ್ತು ಯಜ್ಞವಸ್ತುಗಳನ್ನು ಹಂಚಿಕೊಳ್ಳಲು ಸುಮಾರು ಮೂವತ್ತು ಜನರನ್ನು ಆಹ್ವಾನಿಸಲಾಗಿತ್ತು. ಸಮುವೇಲನು ಸೌಲನಿಗೆ ಮತ್ತು ಅವನ ಸೇವಕನಿಗೆ ಊಟದ ಮೇಜಿನಲ್ಲಿ ಅತೀ ಮುಖ್ಯ
ವಾದ ಸ್ಥಳವನ್ನು ನೀಡಿದನು. 23ಸಮುವೇಲನು ಅಡಿಗೆ
ಯವನಿಗೆ, ''ನಾನು ನಿನಗೆ ಕೊಟ್ಟಿದ್ದ ಮಾಂಸವನ್ನು ತೆಗೆದುಕೊಂಡು ಬಾ; ಪ್ರತ್ಯೇಕವಾಗಿಡಬೇಕೆಂದು ನಾನು ನಿನಗೆ ಹೇಳಿದ್ದ ಭಾಗವೇ ಅದು'' ಎಂದು ಹೇಳಿದನು.

24ಅಡಿಗೆಯವನು ತೊಡೆಯ ಮಾಂಸವನ್ನು ತೆಗೆದುಕೊಂಡು ಬಂದು ಸೌಲನ ಎದುರಿಗೆ ಮೇಜಿನ ಮೇಲಿಟ್ಟನು. ಸಮುವೇಲನು, ''ನಾನು ನಿನಗಾಗಿ ಈ ಮಾಂಸವನ್ನು ಪ್ರತ್ಯೇಕವಾಗಿರಿಸಿದ್ದೇನೆ. ಇದನ್ನು ತಿನ್ನು, ಏಕೆಂದರೆ ಇದನ್ನು ಈ ವಿಶೇಷವಾದ ಸಂದರ್ಭದಲ್ಲಿ ನಿನಗೆ ಕೊಡುವುದಕ್ಕಾಗಿಯೇ ಪ್ರತ್ಯೇಕಿಸಲಾಗಿತ್ತು'' ಎಂದು ಹೇಳಿದನು. ಆದ್ದರಿಂದ ಸೌಲನು ಸಮುವೇಲನ ಜೊತೆಯಲ್ಲಿ ಆ ದಿನ ಊಟಮಾಡಿದನು.

25ಅವರು ಊಟಮಾಡಿದ ನಂತರ, ಆರಾಧನಾ ಸ್ಥಳದಿಂದ ಇಳಿದುಬಂದು, ಪಟ್ಟಣಕ್ಕೆ ಹಿಂದಿರುಗಿದರು. ಸಮುವೇಲನು ಸೌಲನಿಗಾಗಿ ಮಾಲಿಗೆಯ ಮೇಲೆ ಹಾಸಿಗೆಯನ್ನು ಸಿದ್ಧಪಡಿಸಿದನು ಮತ್ತು ಸೌಲನು ಅಲ್ಲಿ ಮಲಗಿದನು.

26ಮಾರನೆಯ ದಿನ ಬೆಳಗಿನ ಜಾವ, ಸಮುವೇಲನು ಮಾಳಿಗೆಯ ಮೇಲೆ ಮಲಗಿದ್ದ ಸೌಲನನ್ನು ಎಬ್ಬಿಸಿ,

‘‘ಎದ್ದೇಳು, ನಿನ್ನನ್ನು ಕಳುಹಿಸಿಕೊಡುತ್ತೇನೆ’’ ಎಂದು
ಹೇಳಿದನು. ಸೌಲನು ಮೇಲೆದ್ದನು ಮತ್ತು ಸಮುವೇಲ
ನೊಂದಿಗೆ ಮನೆಯಿಂದ ಹೊರಗೆ ಹೊರಟನು.
27ಸೌಲನೂ ಅವನ ಸೇವಕನೂ ಸಮುವೇಲನೂ
ಪಟ್ಟಣದ ಅಂಚಿನಲ್ಲಿ ಒಟ್ಟಾಗಿ ನಡೆಯುತ್ತಿದ್ದಾಗ,
ಸಮುವೇಲನು ಸೌಲನಿಗೆ, ‘‘ನಿನ್ನ ಸೇವಕನಿಗೆ ನಮ್ಮಿಂದ
ಮುಂದೆ ಹೋಗಲು ತಿಳಿಸು. ನಾನು ದೇವರ ಸಂದೇಶ
ವನ್ನು ನಿನಗೆ ತಿಳಿಸಬೇಕಾಗಿದೆ’’ ಎಂದು ಹೇಳಿದನು. ಆದ
ಕಾರಣ ಸೇವಕನು ಅವರಿಂದ ಮುಂದೆ ನಡೆದನು.

### ಸಮುವೇಲನಿಂದ ಸೌಲನಿಗೆ ಅಭಿಷೇಕ

10 ಸಮುವೇಲನು ವಿಶೇಷವಾದ ಎಣ್ಣೆಯ ಕುಪ್ಪಿ
ಯನ್ನು ತೆಗೆದುಕೊಂಡು ಸೌಲನ ತಲೆಯ ಮೇಲೆ
ಆ ಎಣ್ಣೆಯನ್ನು ಸುರಿದನು. ಸಮುವೇಲನು ಸೌಲನಿಗೆ
ಮುದ್ದಿಟ್ಟು, ‘‘ಯೆಹೋವನು ತನ್ನ ಜನರನ್ನು ಮುಂದೆ
ನಡೆಸಲು ನಿನ್ನನ್ನು ಅವರಿಗೆ ನಾಯಕನನ್ನಾಗಿ ಅಭಿಷೇಕಿಸಿ
ದ್ದಾನೆ. ನೀನು ಯೆಹೋವನ ಜನರನ್ನು ಆಳುವೆ;
ಅವರನ್ನು ಸುತ್ತುವರೆದಿರುವ ಶತ್ರುಗಳಿಂದ ರಕ್ಷಿಸುವೆ.
ಯೆಹೋವನು ತನ್ನ ಜನರನ್ನು ಆಳುವುದಕ್ಕಾಗಿ ನಿನ್ನನ್ನು
ಅಭಿಷೇಕಿಸಿದ್ದಾನೆ. ಇದು ನಿಜವೆಂಬುದಕ್ಕೆ ಸಾಕ್ಷಿಯೇ
ನಂದರೆ: 2ಈ ದಿನ ನನ್ನನ್ನು ಬಿಟ್ಟು ನೀನು ಮುಂದೆ
ಸಾಗಿದಾಗ, ಬೆನ್ಯಾಮೀನನ ಮೇರೆಯಲ್ಲಿರುವ ಚೆಲ್ಚಹಿನ
ಲ್ಲಿನ ರಾಹೇಲಳ ಸಮಾಧಿಯ ಬಳಿ ಇಬ್ಬರು ಮನುಷ್ಯ
ರನ್ನು ಸಂಧಿಸುವೆ. ಅವರಿಬ್ಬರೂ ನಿನಗೆ, ‘ನೀನು ಹುಡುಕು
ತ್ತಿದ್ದ ಕತ್ತೆಗಳು ಒಬ್ಬನಿಗೆ ಸಿಕ್ಕಿವೆ. ನಿನ್ನ ತಂದೆಯು ಕತ್ತೆಗಳ
ಬಗ್ಗೆ ಚಿಂತಿಸುವುದನ್ನು ಬಿಟ್ಟು, ನಿನ್ನ ಬಗ್ಗೆ ಚಿಂತಿಸು
ತ್ತಿದ್ದಾನೆ: ನನ್ನ ಮಗನು ಎಲ್ಲಿಗೆ ಹೋದನೋ ಎಂದು
ಹಂಬಲಿಸುತ್ತಿದ್ದಾನೆ’’’ ಎಂದು ಹೇಳಿದನು.
3ಸಮುವೇಲನು, ‘‘ನೀನು ಅಲ್ಲಿಂದ ಮುಂದೆ
ಹೋಗುತ್ತಾ ತಾಬೋರಿನ ಹತ್ತಿರವಿರುವ ಒಂದು ದೊಡ್ಡ
ಓಕ್ ವೃಕ್ಷದ ಬಳಿಗೆ ಬರುವೆ. ಅಲ್ಲಿ ನಿನ್ನನ್ನು ಮೂರು
ಜನರು ಭೇಟಿಯಾಗುತ್ತಾರೆ. ಆ ಮೂರು ಜನರು ದೇವರ
ಆರಾಧನೆಗಾಗಿ ಬೇತೇಲಿಗೆ ಹೋಗುತ್ತಿರುತ್ತಾರೆ. ಮೊದ
ಲನೆಯವನು ಮೂರು ಮರಿಹೋತಗಳನ್ನೂ ಎರಡನೆ
ಯವನು ಮೂರು ರೊಟ್ಟಿಗಳನ್ನೂ ಮೂರನೆಯವನು
ಒಂದು ಸೀಸೆ ದ್ರಾಕ್ಷಾರಸವನ್ನೂ ತೆಗೆದುಕೊಂಡು
ಹೋಗುತ್ತಿರುತ್ತಾರೆ. 4ಈ ಮೂವರೂ ನಿನ್ನ ಕ್ಷೇಮವನ್ನು
ವಿಚಾರಿಸುತ್ತಾರೆ. ಅವರು ನಿನಗೆ ಎರಡು ರೊಟ್ಟಿಗಳನ್ನು
ಕೊಡುತ್ತಾರೆ. ನೀನು ಆ ಎರಡು ರೊಟ್ಟಿಗಳನ್ನು ಅವರಿಂದ
ತೆಗೆದುಕೊಳ್ಳುವೆ. 5ನಂತರ ನೀನು ಗಿಬಿಯತ್ ಎಲೋಹಿ
ಮಿಗೆ ಹೋಗುವೆ. ಅಲ್ಲಿ ಒಂದು ಫಿಲಿಷ್ಟಿಯರ ಕೋಟೆ
ಯಿದೆ. ನೀನು ಆ ಪಟ್ಟಣಕ್ಕೆ ಬಂದಾಗ, ಪ್ರವಾದಿಗಳ
ಗುಂಪೊಂದು ಹೊರಬರುತ್ತದೆ. ಈ ಪ್ರವಾದಿಗಳು
ಆರಾಧನಾ ಸ್ಥಳದಿಂದ ಇಳಿದು ಬರುತ್ತಾರೆ, ಅವರು
ಪ್ರವಾದಿಸುತ್ತಿರುತ್ತಾರೆ. ಅವರು ಸ್ವರಮಂಡಲವನ್ನೂ
ದಮ್ಮಡಿಯನ್ನೂ ಕೊಳಲನ್ನೂ ಕಿನ್ನರಿಯನ್ನೂ ನುಡಿಸು
ತ್ತಿರುತ್ತಾರೆ. 6ಆಗ ಯೆಹೋವನ ಆತ್ಮವು ಮಹಾಶಕ್ತಿ
ಯೊಡನೆ ನಿನ್ನ ಮೈಮೇಲೆ ಬರುತ್ತದೆ. ನೀನು ಮಾರ್ಪಾ
ಟಾಗಿ ಬೇರೊಬ್ಬ ಮನುಷ್ಯನಾಗುವೆ. ನೀನೂ ಆ ಪ್ರವಾದಿ
ಗಳಂತೆ ಪ್ರವಾದಿಸಲು ಆರಂಭಿಸುವೆ. 7ಈ ಕಾರ್ಯಗಳು
ಸಂಭವಿಸಿದ ಮೇಲೆ, ನೀನು ನಿನ್ನ ನಿರ್ಧಾರದಂತೆ ಮಾಡು.
ಯಾಕೆಂದರೆ ಯೆಹೋವನು ನಿನ್ನೊಂದಿಗಿರುತ್ತಾನೆ.
8‘‘ನನಗಿಂತ ಮೊದಲು ನೀನು ಗಿಲ್ಗಾಲಿಗೆ ಹೋಗು.
ನಾನು ನಿನ್ನನ್ನು ಅಲ್ಲಿ ಭೇಟಿಯಾಗುತ್ತೇನೆ. ನಾನು ಅಲ್ಲಿ
ಸರ್ವಾಂಗಹೋಮಗಳನ್ನು ಮತ್ತು ಸಮಾಧಾನಯಜ್ಞ
ಗಳನ್ನು ಅರ್ಪಿಸುತ್ತೇನೆ. ಆದರೆ ನೀನು ಏಳು ದಿನಗಳವರೆಗೆ
ಕಾಯಲೇಬೇಕು. ಅನಂತರ ನಾನು ನಿನ್ನ ಬಳಿಗೆ ಬಂದು
ನೀನು ಮಾಡಬೇಕಾದದ್ದನ್ನು ತಿಳಿಸುತ್ತೇನೆ’’ ಎಂದು
ಹೇಳಿದನು.

### ಸೌಲನು ಪ್ರವಾದಿಗಳಂತಾಗುವನು.

9ಸೌಲನು ಸಮುವೇಲನನ್ನು ಬಿಟ್ಟುಹೊರಡಲು ತಿರುಗಿ
ದಂತೆಯೇ ದೇವರು ಸಹ ಸೌಲನ ಜೀವಿತವನ್ನು
ಮಾರ್ಪಾಟು ಮಾಡಿದನು. ಅಂದು ಆ ಸಂಗತಿಗಳೆಲ್ಲಾ
ಸಂಭವಿಸಿದವು. 10ಸೌಲನು ಮತ್ತು ಅವನ ಸೇವಕನು
ಗಿಬಿಯತ್ ಎಲೋಹಿಮಿಗೆ ಹೋದರು. ಸೌಲನು ಆ
ಸ್ಥಳದಲ್ಲಿ ಪ್ರವಾದಿಗಳ ಸಮೂಹವನ್ನು ಸಂಧಿಸಿದನು.
ದೇವರ ಆತ್ಮವು ಮಹಾಶಕ್ತಿಯೊಡನೆ ಸೌಲನ ಮೈಮೇಲೆ
ಬಂದಿತು. ಆಗ ಸೌಲನು ಪ್ರವಾದಿಗಳ ಜೊತೆಯಲ್ಲಿ
ಪ್ರವಾದಿಸಿದನು. 11ಸೌಲನನ್ನು ಮೊದಲು ನೋಡಿದ್ದ
ಜನರು, ಪ್ರವಾದಿಗಳ ಜೊತೆಯಲ್ಲಿ ಸೌಲನು ಪ್ರವಾದಿಸು
ತ್ತಿರುವುದನ್ನು ಕಂಡರು. ಈ ಜನರು, ‘‘ಕೀಷನ ಮಗನಿಗೆ
ಏನಾಯಿತು? ಸೌಲನೂ ಪ್ರವಾದಿಗಳಲ್ಲಿ ಒಬ್ಬ
ನಾದನೇ?’’ ಎಂದು ತಮ್ಮತಮ್ಮೊಳಗೆ ಮಾತನಾಡಿ
ಕೊಂಡರು.
12ಗಿಬಿಯತ್ ಎಲೋಹಿಮಿನಲ್ಲಿ ವಾಸಿಸುತ್ತಿದ್ದ
ಮನುಷ್ಯನೊಬ್ಬನು, ‘‘ಹೌದು, ಅವನು ಅವರ ನಾಯಕ
ನಂತೆ ಕಾಣುತ್ತಿದ್ದಾನೆ’’ ಎಂದು ಹೇಳಿದನು. ಆದುದ
ರಿಂದಲೇ, ‘‘ಸೌಲನೂ ಪ್ರವಾದಿಗಳಲ್ಲಿ ಒಬ್ಬನಾದನು’’
ಎಂಬ ಗಾದೆಯ ಹುಟ್ಟಿಕೊಂಡಿತು.

### ಮನೆಗೆ ಸೌಲನ ಆಗಮನ

13ಸೌಲನು ಪ್ರವಾದಿಸಿದ ನಂತರ, ತನ್ನ ಮನೆಯ
ಸಮೀಪದಲ್ಲಿದ್ದ ಸ್ಥಳಕ್ಕೆ ಆರಾಧನೆಗೋಸ್ಕರ ಹೋದನು.
14ಸೌಲನ ಚಿಕ್ಕಪ್ಪನು ಸೌಲನನ್ನು ಮತ್ತು ಅವನ
ಸೇವಕನನ್ನು, ‘‘ನೀವು ಎಲ್ಲಿಗೆ ಹೋಗಿದ್ದಿರಿ?’’ ಎಂದು
ಕೇಳಿದನು.

ಸೌಲನು ಅವನಿಗೆ, ‘‘ನಾವು ಕತ್ತೆಗಳನ್ನು ಹುಡುಕು
ತ್ತಿದ್ದೆವು. ನಾವು ಅವುಗಳನ್ನು ಕಂಡುಕೊಳ್ಳಲಾರದೆ
ಹೋದಾಗ ಸಮುವೇಲನನ್ನು ನೋಡಲು ಹೋದೆವು’’
ಎಂದು ಹೇಳಿದನು.
15ಸೌಲನ ಚಿಕ್ಕಪ್ಪನು, ‘‘ಸಮುವೇಲನು ನಿನಗೆ ಹೇಳಿ
ದ್ದನ್ನು ನನಗೆ ದಯವಿಟ್ಟು ತಿಳಿಸು’’ ಎಂದು ಹೇಳಿದನು.
16ಸೌಲನು ಅವನಿಗೆ, ‘‘ಕತ್ತೆಗಳು ಈಗಾಗಲೇ ಸಿಕ್ಕಿವೆ
ಎಂದು ಸಮುವೇಲನು ಹೇಳಿದನು’’ ಅಂದನು. ಸೌಲನು
ತನ್ನ ಚಿಕ್ಕಪ್ಪನಿಗೆ ಎಲ್ಲವನ್ನೂ ತಿಳಿಸಲಿಲ್ಲ. ರಾಜ್ಯದ ಬಗ್ಗೆ
ಸಮುವೇಲನು ಹೇಳಿದ ಮಾತುಗಳನ್ನು ಸೌಲನು ತನ್ನ
ಚಿಕ್ಕಪ್ಪನಿಗೆ ತಿಳಿಸಲಿಲ್ಲ.

### ಸೌಲನು ರಾಜನೆಂದು ಸಮುವೇಲನ ಪ್ರಕಟನೆ

17ಸಮುವೇಲನು ಇಸ್ರೇಲರನ್ನು ಮಿಚ್ಪೆಗೆ ಕರೆಸಿ,
ಯೆಹೋವನ ಸನ್ನಿಧಿಯಲ್ಲಿ ಸಭೆಸೇರಿಸಿದನು.
18ಸಮುವೇಲನು ಅವರಿಗೆ, ‘‘ಇಸ್ರೇಲರ ದೇವರಾದ
ಯೆಹೋವನು ಹೇಳುವುದೇನಂದರೆ, ‘ನಾನು ಇಸ್ರೇಲ
ರನ್ನು ಈಜಿಪ್ಟ್ ದೇಶದಿಂದ ಕರೆದುಕೊಂಡು ಬಂದೆನು.
ನಾನು ಈಜಿಪ್ಟಿನವರ ಆಳ್ವಿಕೆಯಿಂದ ಮತ್ತು ನಿಮಗೆ
ಹಾನಿಮಾಡಲು ಪ್ರಯತ್ನಿಸಿದ ಇತರ ರಾಜ್ಯಗಳಿಂದ
ರಕ್ಷಿಸಿದೆನು’ ಎನ್ನುತ್ತಾನೆ. 19ಆದರೆ ಇಂದು ನೀವು ನಿಮ್ಮ
ದೇವರನ್ನು ತಿರಸ್ಕರಿಸಿರುವಿರಿ. ನಿಮ್ಮ ದೇವರು ನಿಮ್ಮನ್ನು
ಕಷ್ಟಗಳಿಂದ ಮತ್ತು ಸಮಸ್ಯೆಗಳಿಂದ ರಕ್ಷಿಸುತ್ತಾನೆ. ಆದರೆ
ನೀವು, ‘ಇಲ್ಲ, ನಮ್ಮನ್ನಾಳಲು ನಮಗೊಬ್ಬ ರಾಜನು
ಬೇಕು’ ಎಂದು ಕೇಳಿದಿರಿ. ಈಗ ಬನ್ನಿ, ನೀವು, ನಿಮ್ಮ
ಕುಲಗಳ ಮತ್ತು ಗೋತ್ರಗಳ ಸಮೇತವಾಗಿ ಯೆಹೋವನ
ಸಮ್ಮುಖದಲ್ಲಿ ನಿಲ್ಲಿರಿ’’ ಎಂದು ಹೇಳಿದನು.
20ಸಮುವೇಲನು ಇಸ್ರೇಲಿನ ಎಲ್ಲಾ ಕುಲದವರನ್ನು
ಹತ್ತಿರಕ್ಕೆ ಕರೆದನು. ನಂತರ ಸಮುವೇಲನು ಹೊಸ ರಾಜ
ನನ್ನು ಆರಿಸಲು ಚೀಟು ಹಾಕತೊಡಗಿದನು. ಮೊದಲ
ನೆಯದಾಗಿ, ಬೆನ್ಯಾಮೀನ್ ಕುಲವು ಆರಿಸಲ್ಪಟ್ಟಿತು.
21ಬೆನ್ಯಾಮೀನ್ ಕುಲದಲ್ಲಿ ಒಂದು ಕುಟುಂಬವನ್ನು
ಆರಿಸಿಕೊಳ್ಳುವುದಕ್ಕಾಗಿ ಮತ್ತೆ ಚೀಟು ಹಾಕಲಾಯಿತು.
ಅದರಲ್ಲಿ ಮಟ್ರಿಯ ಕುಟುಂಬವು ಆರಿಸಲ್ಪಟ್ಟಿತು. ನಂತರ
ಸಮುವೇಲನು ಮಟ್ರಿಯ ಕುಟುಂಬದ ಪ್ರತಿಯೊಬ್ಬನನ್ನು
ಸಮೀಪಕ್ಕೆ ಕರೆದು ಅವರಲ್ಲಿ ಒಬ್ಬನನ್ನು ಆರಿಸಿಕೊಳ್ಳು
ವುದಕ್ಕಾಗಿ ಚೀಟು ಹಾಕಿದನು. ಅದರಲ್ಲಿ ಕೀಷನ ಮಗ
ನಾದ ಸೌಲನು ಆರಿಸಲ್ಪಟ್ಟನು.
ಆದರೆ ಜನರು ಸೌಲನನ್ನು ಹುಡುಕಿದಾಗ ಅವರಿಗೆ
ಅವನು ಸಿಕ್ಕಲಿಲ್ಲ. 22ಆಗ ಅವರು ಯೆಹೋವನನ್ನು,
‘‘ಸೌಲನು ಇಲ್ಲಿಗೆ ಬರುವನೋ?’’ ಎಂದು ಕೇಳಿದರು.
ಯೆಹೋವನು, ‘‘ಸೌಲನು ಸರಕುಗಳ ಹಿಂದೆ ಅಡಗಿ
ಕೊಂಡಿದ್ದಾನೆ’’ ಎಂದು ಹೇಳಿದನು.
23ಜನರು ಓಡಿಹೋಗಿ, ಸರಕುಗಳ ಹಿಂದೆ ಅಡಗಿ
ಕೊಂಡಿದ್ದ ಸೌಲನನ್ನು ಹಿಡಿದುಕೊಂಡು ಬಂದರು.
ಸೌಲನು ಜನರ ಮಧ್ಯದಲ್ಲಿ ನಿಂತುಕೊಂಡನು. ಸೌಲನು
ಇತರ ಜನರಿಗಿಂತ ಎತ್ತರವಾಗಿದ್ದನು.
24ಸಮುವೇಲನು ಜನರೆಲ್ಲರಿಗೆ, ‘‘ಯೆಹೋವನು
ಆರಿಸಿಕೊಂಡಿರುವ ಮನುಷ್ಯನನ್ನು ನೋಡಿದಿರಾ! ಸರ್ವ
ಜನರಲ್ಲಿಯೂ ಸೌಲನಂತಹ
ಮನುಷ್ಯನು ಇನ್ನೊಬ್ಬನಿಲ್ಲ!’’ ಎಂದು ಹೇಳಿದನು.
ಆಗ ಜನರೆಲ್ಲ, ‘‘ರಾಜನು ಚಿರಂಜೀವಿಯಾಗಿರಲಿ’’
ಎಂದು ಆರ್ಭಟಿಸಿದರು.
25ಸಮುವೇಲನು ಜನರಿಗೆ ರಾಜನೀತಿಯ ನಿಯಮ
ಗಳನ್ನು ವಿವರಿಸಿದನು. ಅವನು ಒಂದು ಪುಸ್ತಕದಲ್ಲಿ ಆ
ನಿಯಮಗಳನ್ನು ಬರೆದನು. ಅವನು ಯೆಹೋವನ
ಸನ್ನಿಧಿಯಲ್ಲಿ ಆ ಪುಸ್ತಕವನ್ನಿಟ್ಟನು. ಬಳಿಕ ಸಮುವೇಲನು
ಜನರನ್ನು ಮನೆಗಳಿಗೆ ಹಿಂದಿರುಗಲು ಹೇಳಿದನು.
26ಸೌಲನು ಸಹ ಗಿಬೆಯದ ತನ್ನ ಮನೆಗೆ ಹೋದನು.
ಕೆಲವು ಶೂರರು ದೈವಪ್ರೇರಣೆಯಿಂದ ಸೌಲನನ್ನು
ಹಿಂಬಾಲಿಸಿದರು. 27ಆದರೆ ಕೆಲವು ಕಿರುಕುಳಕಾರರು,
‘‘ಈ ಮನುಷ್ಯನು ಹೇಗೆತಾನೆ ನಮ್ಮನ್ನು ರಕ್ಷಿಸುವನು?’’
ಎಂದು ಹೇಳಿದರು. ಅವರು ಸೌಲನ ಬಗ್ಗೆ ಕೆಟ್ಟಮಾತು
ಗಳನ್ನು ಆಡಿದರು; ಅವನನ್ನು ತಿರಸ್ಕರಿಸಿ, ಕಾಣಿಕೆಗಳನ್ನು
ತಂದುಕೊಡಲಿಲ್ಲ, ಆದರೆ ಸೌಲನು ಏನೂ
ಮಾತನಾಡಲಿಲ್ಲ.

### ಅಮ್ಮೋನಿಯರ ರಾಜನಾದ ನಾಹಾಷ

ಅಮ್ಮೋನಿಯರ ರಾಜನಾದ ನಾಹಾಷನು, ಗಾದ್
ಮತ್ತು ರೂಬೇನ್ ಕುಲದವರಿಗೆ ಕಿರುಕುಳಕೊಡುತ್ತಿದ್ದನು.
ನಾಹಾಷನು ಪ್ರತಿ ಮನುಷ್ಯನ ಬಲಗಣ್ಣನ್ನು ಕಿತ್ತುಹಾಕು
ತ್ತಿದ್ದನು. ನಾಹಾಷನು ಅವರಿಗೆ ಸಹಾಯಮಾಡಲು
ಯಾರಿಗೂ ಅವಕಾಶಕೊಡುತ್ತಿರಲಿಲ್ಲ. ಅಮ್ಮೋನಿಯರ
ರಾಜನಾದ ನಾಹಾಷನು ಜೋರ್ಡನ್ ನದಿಯ ಪೂರ್ವ
ಪ್ರದೇಶದಲ್ಲಿ ವಾಸವಾಗಿದ್ದ ಎಲ್ಲ ಇಸ್ರೇಲರ ಬಲಗಣ್ಣನ್ನು
ಕಿತ್ತು ಹಾಕುತ್ತಿದ್ದನು. ಆದ್ದರಿಂದ ಅಮ್ಮೋನಿಯರಿಂದ
ಏಳು ಸಾವಿರ ಮಂದಿ ಇಸ್ರೇಲರು ಯಾಬೇಷ್‌ಗಿಲ್ಯಾದಿಗೆ
ಓಡಿಹೋದರು.
11 ಅಮ್ಮೋನಿಯನಾದ ನಾಹಾಷನು ಒಂದು ತಿಂಗಳ
ನಂತರ, ತನ್ನ ಸೈನ್ಯದೊಂದಿಗೆ ಯಾಬೇಷ್
ಗಿಲ್ಯಾದಿಗೆ ಮುತ್ತಿಗೆ ಹಾಕಿದನು. ಯಾಬೇಷಿನ ಜನರೆಲ್ಲ
ನಾಹಾಷನಿಗೆ, ‘‘ನೀನು ನಮ್ಮೊಂದಿಗೆ ಒಪ್ಪಂದ ಮಾಡಿ
ಕೊಳ್ಳುವುದಾದರೆ, ನಾವು ನಿನ್ನ ಸೇವೆಮಾಡುತ್ತೇವೆ’’
ಎಂದು ಹೇಳಿದರು.
2ಆದರೆ ಅಮ್ಮೋನಿಯನಾದ ನಾಹಾಷನು, ‘‘ನಾನು
ನಿಮ್ಮಲ್ಲಿ ಪ್ರತಿಯೊಬ್ಬರ ಬಲಗಣ್ಣನ್ನು ಕಿತ್ತುಹಾಕಿದಾಗ

ಮಾತ್ರ ನಿಮ್ಮೊಂದಿಗೆ ಒಪ್ಪಂದ ಮಾಡಿಕೊಳ್ಳುತ್ತೇನೆ. ಆಗ
ಇಸ್ರೇಲರಿಗೆಲ್ಲಾ ಅವಮಾನವಾಗುವುದು'' ಎಂದು
ಉತ್ತರಿಸಿದನು.
3ಯಾಬೇಷಿನ ಹಿರಿಯರು ನಾಹಾಷನಿಗೆ, ''ನಮಗೆ
ಏಳು ದಿನಗಳವರೆಗೆ ಸಮಯ ಕೊಡು. ನಾವು ಇಸ್ರೇಲಿನ
ಎಲ್ಲಾ ಕಡೆಗೆ ದೂತರನ್ನು ಕಳುಹಿಸುತ್ತೇವೆ. ನಮ್ಮನ್ನು
ರಕ್ಷಿಸಲು ಯಾರೂ ಬರದಿದ್ದರೆ ನಾವೆಲ್ಲ ನಿನ್ನ ಬಳಿಗೆ
ಬರುತ್ತೇವೆ ಹಾಗೂ ನಿನಗೆ ಅಧೀನರಾಗುತ್ತೇವೆ'' ಎಂದು
ಹೇಳಿದರು.

### ಸೌಲನು ಯಾಬೇಷ್ ಗಿಲ್ಯಾದನ್ನು ರಕ್ಷಿಸುವನು

4ಸೌಲನು ವಾಸವಾಗಿದ್ದ ಗಿಬೆಯಕ್ಕೆ ಸಂದೇಶಕರು
ಬಂದು ಜನರಿಗೆ ಸುದ್ದಿಯನ್ನು ತಿಳಿಸಿದರು. ಜನರು ಗಟ್ಟಿ
ಯಾಗಿ ಅತ್ತರು. 5ಸೌಲನು ಹಸುಗಳನ್ನು ಹೊಡೆದು
ಕೊಂಡು ಹೊಲಕ್ಕೆ ಹೋಗಿದ್ದನು. ಸೌಲನು ಹೊಲದಿಂದ
ಬಂದಾಗ ಜನರೆಲ್ಲ ಅಳುವುದು ಕೇಳಿಸಿತು. ಸೌಲನು,
''ಏನಾಯಿತು? ಜನರು ಅಳುತ್ತಿರುವುದೇಕೆ? ಎಂದು
ಕೇಳಿದನು.

ಆಗ ಜನರೆಲ್ಲ ಯಾಬೇಷಿನ ಸಂದೇಶಕರು ಹೇಳಿ
ದ್ದನ್ನೆಲ್ಲ ಸೌಲನಿಗೆ ತಿಳಿಸಿದರು. 6ಅವರು ಹೇಳಿದ್ದನ್ನು
ಕೇಳಿದಾಗ ದೇವರಾತ್ಮನು ಸೌಲನ ಮೈಮೇಲೆ ಮಹಾಶಕ್ತಿ
ಯೊಡನೆ ಬಂದಿತು. ಸೌಲನು ಬಹು ಕೋಪಗೊಂಡನು.
7ಸೌಲನು ಒಂದು ಜೊತೆ ಹಸುಗಳನ್ನು ತೆಗೆದುಕೊಂಡು
ಅವುಗಳನ್ನು ತುಂಡುತುಂಡಾಗಿ ಕತ್ತರಿಸಿ ಆ ತುಂಡುಗಳನ್ನು
ಸಂದೇಶಕರಿಗೆ ಕೊಟ್ಟನು. ''ಇಸ್ರೇಲಿನ ನಾಡಿನಲ್ಲೆಲ್ಲಾ ಈ
ಚೂರುಗಳನ್ನು ತೆಗೆದುಕೊಂಡು ಹೋಗಿ ಅವರಿಗೆ,
'ಸೌಲನನ್ನೂ ಮತ್ತು ಸಮುವೇಲನನ್ನೂ ಹಿಂಬಾಲಿಸಿರಿ,
ಸೌಲನನ್ನು ಮತ್ತು ಸಮುವೇಲನನ್ನು ಯಾರು ಹಿಂಬಾ
ಲಿಸುವುದಿಲ್ಲವೋ ಯಾರು ಅವರಿಗೆ ಸಹಾಯ ಮಾಡುವು
ದಿಲ್ಲವೋ ಅಂತಹವರ ಹಸುಗಳಿಗೂ ಇದೇ ಗತಿ
ಯಾಗುತ್ತದೆ' ಎಂದು ತಿಳಿಸಿರಿ'' ಎಂದನು

ಯೆಹೋವನ ಮೇಲೆ ಜನರಲ್ಲಿ ಹೆಚ್ಚು ಭಯ
ವುಂಟಾಯಿತು. ಅವರೆಲ್ಲಾ ಒಂದೇ ಮನಸ್ಸಿನಿಂದ ಒಟ್ಟಾಗಿ
ಸೇರಿ ಬಂದರು. 8ಸೌಲನು ಬೆಜೆಕಿನಲ್ಲಿ ಅವರೆಲ್ಲರನ್ನೂ
ಒಟ್ಟುಗೂಡಿಸಿದನು. ಅಲ್ಲಿ ಮೂರು ಲಕ್ಷ ಇಸ್ರೇಲರೂ
ಮೂವತ್ತು ಸಾವಿರ ಯೆಹೂದ್ಯರೂ ಇದ್ದರು.
9ಸೌಲನು ಮತ್ತು ಅವನ ಸೈನಿಕರು ಯಾಬೇಷಿನ
ಸಂದೇಶಕರಿಗೆ, ''ಗಿಲ್ಯಾದಿನ ಯಾಬೇಷ್ ಜನರಿಗೆ ನಾಳೆ
ನಡುಮಧ್ಯಾಹ್ನದೊಳಗೆ ನಿಮ್ಮನ್ನು ರಕ್ಷಿಸುತ್ತೇವೆಂದು
ತಿಳಿಸಿ'' ಎಂಬುದಾಗಿ ಹೇಳಿದರು.

ಯಾಬೇಷಿನ ಜನರಿಗೆ ಸೌಲನ ಸಂದೇಶವನ್ನು
ಸಂದೇಶಕರು ತಿಳಿಸಿದರು. ಯಾಬೇಷಿನ ಜನರು ಹರ್ಷಿತ
ರಾದರು. 10ನಂತರ ಯಾಬೇಷಿನ ಜನರು ಅಮ್ಮೋನಿ
ಯದ ನಾಹಾಷನಿಗೆ, ''ನಾವು ನಾಳೆ ನಿನ್ನ ಬಳಿಗೆ ಬರು
ತ್ತೇವೆ. ಆಗ ನಿನಗೆ ತೋಚಿದ್ದನ್ನು ನಮಗೆ ಮಾಡು' ಎಂದು
ಹೇಳಿದರು.
11ಮಾರನೆಯ ದಿನ ಬೆಳಿಗ್ಗೆ ಸೌಲನು ತನ್ನ ಸೈನ್ಯವನ್ನು
ಮೂರು ಗುಂಪುಗಳಾಗಿ ವಿಂಗಡಿಸಿದನು. ಸೌಲನು ಮತ್ತು
ಅವನ ಸೈನಿಕರು ಬೆಳಗಿನ ಜಾವದಲ್ಲೇ ಅಮ್ಮೋನಿಯರ
ಶಿಬಿರದೊಳಕ್ಕೆ ನುಗ್ಗಿದರು. ಅವರು ಆ ದಿನ ಬೆಳಗಿನ ಜಾವ
ಶಿಬಿರ ರಕ್ಷಕರನ್ನು ಬದಲಾಯಿಸುತ್ತಿದ್ದಂತೆಯೇ ಸೌಲನು
ಆಕ್ರಮಣ ಮಾಡಿದನು. ಸೌಲನು ಮತ್ತು ಅವನ ಸೈನಿಕರು
ನಡುಮಧ್ಯಾಹ್ನದೊಳಗೆ ಅಮ್ಮೋನಿಯರನ್ನು ಸೋಲಿಸಿ
ದರು. ಅಮ್ಮೋನಿಯ ಸೈನಿಕರೆಲ್ಲರೂ ದಿಕ್ಕುಪಾಲಾಗಿ
ಓಡಿಹೋದರು; ಅವರು ಒಟ್ಟಾಗಿ ಸೇರಿ ಬರಲು ಸಾಧ್ಯ
ವಾಗಲಿಲ್ಲ.
12ತರುವಾಯ ಜನರೆಲ್ಲರು ಸಮುವೇಲನಿಗೆ,
''ಸೌಲನು ರಾಜನಾಗಿ ಆಳುವುದು ಬೇಕಿಲ್ಲ ಎಂದು
ಹೇಳಿದ್ದ ಜನರೆಲ್ಲ ಎಲ್ಲಿ ಹೋದರು? ಅವರನ್ನು ನಮಗೆ
ಒಪ್ಪಿಸಿ, ನಾವು ಅವರನ್ನು ಕೊಂದುಹಾಕುತ್ತೇವೆ'' ಎಂದು
ಹೇಳಿದರು.
13ಆದರೆ ಸೌಲನು, ''ಯೆಹೋವನು ಇಸ್ರೇಲನ್ನು
ರಕ್ಷಿಸಿದ್ದಾನೆ. ಈ ದಿನ ಯಾರನ್ನೂ ಕೊಲ್ಲುವುದು ಬೇಡ''
ಎಂದು ಹೇಳಿದನು.
14ಬಳಿಕ ಸಮುವೇಲನು, ''ನಾವೆಲ್ಲ ಗಿಲ್ಗಾಲಿಗೆ ಹೋಗಿ
ಸೌಲನನ್ನು ಮತ್ತೆ ರಾಜನನ್ನಾಗಿ ಮಾಡೋಣ'' ಎಂದು
ಜನರಿಗೆ ಹೇಳಿದನು.
15ಜನರೆಲ್ಲ ಗಿಲ್ಗಾಲಿಗೆ ಹೋದರು. ಅಲ್ಲಿ ಯೆಹೋವನ
ಸಮ್ಮುಖದಲ್ಲಿ ಜನರೆಲ್ಲ ಸೌಲನನ್ನು ರಾಜನನ್ನಾಗಿ
ಮಾಡಿದರು. ಅವರೆಲ್ಲರು ಯೆಹೋವನಿಗೆ ಸಮಾಧಾನ
ಯಜ್ಞಗಳನ್ನು ಅರ್ಪಿಸಿದರು. ಸೌಲನು ಮತ್ತು ಇಸ್ರೇಲ
ರೆಲ್ಲಾ ಒಂದು ದೊಡ್ಡ ಉತ್ಸವವನ್ನೇ ಮಾಡಿದರು.

### ಸಮುವೇಲನು ಇಸ್ರೇಲರಿಗೆ ರಾಜನ ಕುರಿತು ಹೇಳಿದ ಮಾತುಗಳು

12 ಸಮುವೇಲನು ಇಸ್ರೇಲರೆಲ್ಲರಿಗೆ, ''ನೀವು
ನನ್ನಿಂದ ಅಪೇಕ್ಷಿಸಿದ ಎಲ್ಲವನ್ನೂ ನಾನು
ಮಾಡಿರುತ್ತೇನೆ. ನಾನು ನಿಮಗಾಗಿ ಒಬ್ಬ ರಾಜನನ್ನು
ನೇಮಿಸಿದ್ದೇನೆ. 2ಈಗ ನಿಮ್ಮನ್ನು ಮುನ್ನಡೆಸಲು ಒಬ್ಬ
ರಾಜನಿದ್ದಾನೆ. ನಾನು ಮುದುಕನಾಗಿರುವೆ ಮತ್ತು ನನ್ನ
ತಲೆ ನರೆತುಹೋಗಿದೆ. ನನ್ನ ಗಂಡುಮಕ್ಕಳು ನಿಮ್ಮೊಂದಿಗಿ
ದ್ದಾರೆ. ನಾನು ಚಿಕ್ಕಂದಿನಿಂದಲೇ ನಿಮ್ಮ ನಾಯಕನಾಗಿದ್ದೆ.
3ನಾನು ಇಲ್ಲಿದ್ದೇನೆ. ನಾನು ಯಾವ ತಪ್ಪುಗಳನ್ನಾದರೂ
ಮಾಡಿದ್ದರೆ, ನೀವು ಯೆಹೋವನಿಗೆ ಮತ್ತು ಆತನು
ಆರಿಸಿರುವ ರಾಜನಿಗೆ ಅವುಗಳನ್ನು ಹೇಳಲೇಬೇಕು.

ನಾನು ಬೇರೊಬ್ಬರ ಹಸುವನ್ನಾಗಲೀ ಕತ್ತೆಯನ್ನಾಗಲೀ
ಕದ್ದಿರುವೆನೇ? ನಾನು ಯಾರನ್ನಾದರೂ ನೋಯಿಸಿರು
ವೆನೇ? ವಂಚಿಸಿರುವೆನೇ? ನಾನು ತಪ್ಪು ಮಾಡಲು
ಯಾರಿಂದಲಾದರೂ ಹಣವನ್ನಾಗಲೀ ಪಾದರಕ್ಷೆಗಳ
ನ್ನಾಗಲೀ ತೆಗೆದುಕೊಂಡಿರುವೆನೇ? ನಾನು ಈ ಕಾರ್ಯ
ಗಳನ್ನು ಮಾಡಿರುವುದಾದರೆ ತಿಳಿಸಿ, ಅವುಗಳನ್ನು ಸರಿ
ಪಡಿಸುತ್ತೇನೆ'' ಎಂದು ಹೇಳಿದನು.

4ಇಸ್ರೇಲರು, ''ಇಲ್ಲ, ನೀನು ನಮಗೆ ಕೆಟ್ಟದ್ದೇನನ್ನೂ
ಮಾಡಿಲ್ಲ. ನೀನು ನಮ್ಮನ್ನು ಎಂದೂ ವಂಚಿಸಿಲ್ಲ;
ನಮ್ಮಿಂದ ಏನನ್ನೂ ತೆಗೆದುಕೊಂಡಿಲ್ಲ'' ಎಂದು
ಉತ್ತರಿಸಿದರು.

5ಸಮುವೇಲನು ಇಸ್ರೇಲರಿಗೆ, ''ನಿಮ್ಮ ಮಾತುಗಳಿಗೆಲ್ಲ
ಯೆಹೋವನೇ ಸಾಕ್ಷಿ. ಯೆಹೋವನಿಂದ ಆಯ್ಕೆಯಾದ
ರಾಜನೂ ಈ ದಿನ ಸಾಕ್ಷಿಯಾಗಿದ್ದಾನೆ. ನೀವು ನನ್ನಲ್ಲಿ
ಯಾವ ತಪ್ಪನ್ನೂ ಗುರುತಿಸಿಲ್ಲವೆನ್ನುವುದಕ್ಕೆ ಈ ಇಬ್ಬರು
ಸಾಕ್ಷಿಗಳಾಗಿದ್ದಾರೆ'' ಎಂದು ಹೇಳಿದರು. ಜನರು,
''ಹೌದು, ಯೆಹೋವನೇ ಸಾಕ್ಷಿ'' ಎಂದು ಉತ್ತರಿಸಿದರು.

6ಆಗ ಸಮುವೇಲನು ಜನರಿಗೆ, ''ಯೆಹೋವನೇ ಸಾಕ್ಷಿ.
ಯೆಹೋವನು, ಮೋಶೆ ಆರೋನರನ್ನು ಆರಿಸಿ
ಕೊಂಡನು. ಆತನು ನಿಮ್ಮ ಪೂರ್ವಿಕರನ್ನು ಈಜಿಪ್ಟಿನಿಂದ
ಕರೆದುಕೊಂಡು ಬಂದನು. 7ಇಲ್ಲಿ ನಿಂತುಕೊಂಡು
ಕೇಳಿರಿ. ಯೆಹೋವನು ನಿಮಗೆ ಮತ್ತು ನಿಮ್ಮ ಪೂರ್ವಿಕ
ರಿಗೆ ಮಾಡಿದ ಒಳ್ಳೆಯ ಕಾರ್ಯಗಳನ್ನು ನಾನು ನಿಮಗೆ
ತಿಳಿಸುತ್ತೇನೆ. 8ಯಾಕೋಬನು ಈಜಿಪ್ಟಿಗೆ ಹೋದನು.
ತರುವಾಯ, ಈಜಿಪ್ಟಿನವರು ಅವನ ವಂಶದವರಿಗೆ
ಜೀವನವನ್ನು ಕಠಿಣಗೊಳಿಸಿದರು. ಆದ್ದರಿಂದ ಅವರು
ಯೆಹೋವನಲ್ಲಿ ಸಹಾಯಕ್ಕಾಗಿ ಮೊರೆಯಿಟ್ಟರು.
ಯೆಹೋವನು ಮೋಶೆ ಆರೋನರನ್ನು ಕಳುಹಿಸಿದನು.
ಮೋಶೆ ಆರೋನರು ನಿಮ್ಮ ಪೂರ್ವಿಕರನ್ನು ಈಜಿಪ್ಟಿ
ನಿಂದ ಹೊರತಂದು ಇಲ್ಲಿ ನೆಲೆಗೊಳಿಸಿದರು.

9ಆದರೆ ನಿಮ್ಮ ಪೂರ್ವಿಕರು ತಮ್ಮ ದೇವರಾದ
ಯೆಹೋವನನ್ನು ಮರೆತುಬಿಟ್ಟದ್ದರಿಂದ ಆತನು ಅವ
ರನ್ನು ಸೀಸೆರನ ಗುಲಾಮರಾಗಲು ಬಿಟ್ಟುಬಿಟ್ಟನು. ಸೀಸೆ
ರನು ಹಾಚೋರಿನ ಸೈನ್ಯಾಧಿಪತಿ. ನಂತರ ಯೆಹೋವನು
ಅವರನ್ನು ಫಿಲಿಷ್ಟಿಯರ ಮತ್ತು ಮೋವಾಬ್ ರಾಜನ
ಗುಲಾಮರಾಗುವಂತೆ ಬಿಟ್ಟುಬಿಟ್ಟನು. ಅವರೆಲ್ಲರು ನಿಮ್ಮ
ವಂಶದವರ ವಿರುದ್ಧ ಹೋರಾಡಿದರು. 10ಆದರೆ ನಿಮ್ಮ
ಪೂರ್ವಿಕರು ಸಹಾಯಕ್ಕಾಗಿ ಯೆಹೋವನಿಗೆ ಮೊರೆ
ಯಿಟ್ಟು, 'ನಾವು ಪಾಪಮಾಡಿದ್ದೇವೆ. ನಾವು ಯೆಹೋವ
ನನ್ನು ಬಿಟ್ಟುಬಿಟ್ಟೆವು; ಸುಳ್ಳುದೇವರಾದ ಬಾಳನ ಮತ್ತು
ಸುಳ್ಳುದೇವತೆಯಾದ ಅಷ್ಟೋರೆತಳ ಸೇವೆಮಾಡಿದೆವು.
ಆದರೆ ಈಗ ನಮ್ಮನ್ನು ಶತ್ರುಗಳಿಂದ ರಕ್ಷಿಸು; ಆಗ ನಾವು
ನಿನ್ನ ಸೇವೆಮಾಡುತ್ತೇವೆ' ಎಂದು ಹೇಳಿದರು.

11''ಆದುದರಿಂದ ಯೆಹೋವನು ಯೆರುಬ್ಬಾಳ್,
ಬಾರಾಕ್ ಯೆಫ್ತಾಹ ಮತ್ತು ಸಮುವೇಲ ಎಂಬವರನ್ನು
ಕಳುಹಿಸಿದನು. ನಿಮ್ಮನ್ನು ಸುತ್ತುವರಿದಿದ್ದ ಶತ್ರುಗಳಿಂದ
ಯೆಹೋವನು ರಕ್ಷಿಸಿದನು. ನೀವು ಸುರಕ್ಷಿತವಾಗಿ
ವಾಸಿಸಿದಿರಿ. 12ಆದರೆ ಅಮ್ಮೋನಿಯರ ರಾಜನಾದ
ನಾಹಾಷನು ನಿಮ್ಮ ವಿರುದ್ಧ ಹೋರಾಡಲು ಬರುತ್ತಿರು
ವುದನ್ನು ಕಂಡು ನೀವು, 'ನಮ್ಮನ್ನಾಳಲು ನಮಗೆ ಒಬ್ಬ
ರಾಜ ಬೇಕು' ಎಂದು ಕೇಳಿದಿರಿ. ನಿಮ್ಮ ದೇವರಾದ
ಯೆಹೋವನು ನಿಮ್ಮ ರಾಜನಾಗಿದ್ದರೂ ನೀವು ಹೀಗೆ
ಕೇಳಿದಿರಿ. 13ಇಗೋ, ನೀವು ಆಸೆಪಟ್ಟು ಆರಿಸಿದ ರಾಜನು
ಇಲ್ಲಿರುವನು. ಯೆಹೋವನು ಈ ರಾಜನನ್ನು ನಿಮಗೆ
ನೇಮಿಸಿದ್ದಾನೆ.

14ನಿಮ್ಮ ದೇವರಾದ ಯೆಹೋವನು ನಿಮ್ಮನ್ನು
ನಿರಂತರವಾಗಿ ರಕ್ಷಿಸುತ್ತಾನೆ. ಆದರೆ ನೀವು ಈ
ಕಾರ್ಯಗಳನ್ನು ಮಾಡಿದರೆ ಮಾತ್ರ ದೇವರು ನಿಮ್ಮನ್ನು
ರಕ್ಷಿಸುತ್ತಾನೆ: ನೀವು ಯೆಹೋವನನ್ನು ಗೌರವಿಸಬೇಕು
ಮತ್ತು ಆತನ ಸೇವೆ ಮಾಡಬೇಕು. ನೀವು ಆತನ ಆಜ್ಞೆ
ಗಳನ್ನು ವಿರೋಧಿಸಬಾರದು. ನಿಮ್ಮ ದೇವರಾದ
ಯೆಹೋವನ ಮಾರ್ಗವನ್ನು ನೀವು ಮತ್ತು ನಿಮ್ಮನ್ನು
ಆಳುವ ರಾಜನು ಅನುಸರಿಸಬೇಕು. ನೀವು ಈ ಕಾರ್ಯ
ಗಳನ್ನು ಮಾಡಿದಾಗ ದೇವರು ನಿಮ್ಮನ್ನು ರಕ್ಷಿಸುತ್ತಾನೆ.
15ಆದರೆ ನೀವು ಯೆಹೋವನಿಗೆ ವಿಧೇಯರಾಗಿ
ನಡೆಯದಿದ್ದರೆ ಮತ್ತು ಆತನ ಆಜ್ಞೆಗಳನ್ನು ವಿರೋಧಿ
ಸಿದರೆ, ಆತನು ನಿಮಗೆ ವಿರೋಧವಾಗುತ್ತಾನೆ.
ಯೆಹೋವನು ನಿಮ್ಮನ್ನೂ ನಿಮ್ಮ ರಾಜನನ್ನೂ ನಾಶ
ಗೊಳಿಸುತ್ತಾನೆ.

16''ಈಗ ಯೆಹೋವನು ನಿಮ್ಮ ಕಣ್ಣುಗಳ ಮುಂದೆ
ಮಾಡುವ ಮಹತ್ಕಾರ್ಯಗಳನ್ನು ನೋಡುವುದಕ್ಕಾಗಿ
ಅಲುಗಾಡದೆ ನಿಂತುಕೊಳ್ಳಿ. 17ಈಗ ಗೋಧಿಯ ಸುಗ್ಗಿ
ಕಾಲ. ನಾನು ಯೆಹೋವನಲ್ಲಿ ಪ್ರಾರ್ಥಿಸುತ್ತೇನೆ. ಆತನು
ಗುಡುಗನ್ನು ಮತ್ತು ಮಳೆಯನ್ನು ಕಳುಹಿಸಲೆಂದು ನಾನು
ಪ್ರಾರ್ಥಿಸುತ್ತೇನೆ. ರಾಜನು ಬೇಕೆಂದು ನೀವು ಕೇಳಿದ್ದು
ಯೆಹೋವನಿಗೆ ವಿರುದ್ಧವಾಗಿ ನೀವು ಮಾಡಿದ ಎಂತಹ
ಕೆಟ್ಟಕಾರ್ಯವಾಗಿದೆ ಎಂಬದನ್ನು ನಿಮಗೇ ತಿಳಿ
ಯುತ್ತದೆ'' ಎಂದು ಹೇಳಿದನು.

18ಸಮುವೇಲನು ಯೆಹೋವನಲ್ಲಿ ಪ್ರಾರ್ಥಿಸಿದನು.
ಅದೇ ದಿನ ಯೆಹೋವನು ಗುಡುಗು ಮತ್ತು ಮಳೆಗಳನ್ನು
ಕಳುಹಿಸಿದನು. ಜನರು ಯೆಹೋವನ ಬಗ್ಗೆ ಮತ್ತು
ಸಮುವೇಲನ ಬಗ್ಗೆ ಬಹಳ ಭಯಗೊಂಡರು.
19ಜನರೆಲ್ಲಾ ಸಮುವೇಲನಿಗೆ, ''ನಿನ್ನ ಸೇವಕರಾದ ನಮ
ಗಾಗಿ, ನಿನ್ನ ದೇವರಾದ ಯೆಹೋವನಲ್ಲಿ ಪ್ರಾರ್ಥಿಸು.
ನಮ್ಮನ್ನು ಸಾಯಲು ಬಿಡಬೇಡ. ನಾವು ಅನೇಕ ಸಲ
ಪಾಪಗಳನ್ನು ಮಾಡಿದ್ದೇವೆ. ಈಗ ನಾವು ರಾಜನನ್ನು

ಕೇಳಿಕೊಂಡಿದ್ದು ನಮ್ಮ ಪಾಪಗಳೊಂದಿಗೆ ಮತ್ತೊಂದು
ಪಾಪವನ್ನು ಮಾಡಿದಂತಾಯಿತು'' ಎಂದು ಹೇಳಿದರು.
20ಸಮುವೇಲನು, ''ಭಯಪಡಬೇಡಿ. ಅದೇನೊ ನಿಜ.
ನೀವು ಆ ಕೆಟ್ಟಕಾರ್ಯಗಳನ್ನೆಲ್ಲಾ ಮಾಡಿದಿರಿ. ಆದರೆ
ಯೆಹೋವನ ಮಾರ್ಗದಲ್ಲಿ ನಡೆಯುವುದನ್ನು ನಿಲ್ಲಿಸ
ದಿರಿ. ಯೆಹೋವನ ಸೇವೆಯನ್ನು ಪೂರ್ಣಹೃದಯದಿಂದ
ಮಾಡಿರಿ. 21ವಿಗ್ರಹಗಳು ಕೇವಲ ಪ್ರತಿಮೆಗಳಷ್ಟೇ. ಅವು
ನಿಮಗೆ ಸಹಾಯ ಮಾಡಲಾರವು. ಆದ್ದರಿಂದ ಅವುಗಳನ್ನು
ಪೂಜಿಸಬೇಡಿ. ವಿಗ್ರಹಗಳು ನಿಮಗೆ ಸಹಾಯ ಮಾಡ
ಲಾರವು ಮತ್ತು ರಕ್ಷಿಸಲಾರವು. ಅವುಗಳಿಂದ ಪ್ರಯೋ
ಜನವೇನೂ ಇಲ್ಲ'' ಎಂದು ಉತ್ತರಿಸಿದನು.
22''ಆದರೆ ಯೆಹೋವನು ತನ್ನ ಜನರನ್ನು ಕೈಬಿಡು
ವುದಿಲ್ಲ. ಯೆಹೋವನು ನಿಮ್ಮನ್ನು ತನ್ನ ಸ್ವಂತ ಜನರನ್ನಾಗಿ
ಮಾಡಿಕೊಳ್ಳಲು ಇಷ್ಟಪಟ್ಟನು. ಆದುದರಿಂದ ಆತನು ತನ್ನ
ಮಹಾಹೆಸರಿನ ನಿಮಿತ್ತವಾಗಿ ನಿಮ್ಮನ್ನು ತ್ಯಜಿಸುವುದಿಲ್ಲ.
23ನಾನು ನಿಮಗಾಗಿ ಪ್ರಾರ್ಥಿಸದಿದ್ದರೆ ಯೆಹೋವನಿಗೆ
ವಿರುದ್ಧವಾಗಿ ಪಾಪಮಾಡಿದವನಾಗುತ್ತೇನೆ. ನಾನು
ನಿಮಗೆ ಒಳ್ಳೆಯದೂ ಯೋಗ್ಯವೂ ಆಗಿರುವ ಮಾರ್ಗ
ವನ್ನು ಉಪದೇಶಿಸುತ್ತೇನೆ. 24ಆದರೆ ನೀವು ಯೆಹೋವ
ನನ್ನು ಗೌರವಿಸಬೇಕು. ನೀವು ನಿಮ್ಮ ಪೂರ್ಣಹೃದಯ
ದಿಂದ ಯೆಹೋವನ ಸೇವೆಯನ್ನು ನಿಜವಾಗಿಯೂ
ಮಾಡಬೇಕು. ಆತನು ನಿಮಗಾಗಿ ಮಾಡಿದ ಆಶ್ಚರ್ಯ
ಕರವಾದ ಕಾರ್ಯಗಳನ್ನು ನೆನಸಿಕೊಳ್ಳಿರಿ. 25ಆದರೆ ನೀವು
ಮೊಂಡರಾಗಿ ಕೆಟ್ಟ ಕಾರ್ಯಗಳನ್ನು ಮಾಡಿದ್ದಾದರೆ.
ಯೆಹೋವನು ನಿಮ್ಮನ್ನು ಮತ್ತು ನಿಮ್ಮ ರಾಜನನ್ನು
ಕಸಬರಿಕೆಯಿಂದ ಕಸವನ್ನು ಗುಡಿಸುವಂತೆ ನಾಶ
ಪಡಿಸುತ್ತಾನೆ'' ಎಂದು ಹೇಳಿದನು.

### ಸೌಲನು ಮಾಡಿದ ಮೊದಲ ತಪ್ಪು

13 ಆ ಸಮಯದಲ್ಲಿ ಸೌಲನು ರಾಜನಾಗಿ ಒಂದು
ವರ್ಷವಾಗಿತ್ತು. ಸೌಲನು ಎರಡು ವರ್ಷಗಳ
ಕಾಲ ಇಸ್ರೇಲನ್ನು ಆಳಿದ ನಂತರ, 2ಅವನು ಮೂರು
ಸಾವಿರ ಇಸ್ರೇಲ್ ಗಂಡಸರನ್ನು ಆರಿಸಿಕೊಂಡನು. ಅವ
ರಲ್ಲಿ ಎರಡು ಸಾವಿರ ಗಂಡಸರು ಗುಡ್ಡಗಾಡು ಪ್ರದೇಶ
ವಾದ ಬೇತೇಲಿನ ಮಿಕ್ಮಾಷಿನಲ್ಲಿ ಅವನೊಂದಿಗೆ ಇದ್ದರು.
ಉಳಿದ ಒಂದು ಸಾವಿರ ಗಂಡಸರು ಬೆನ್ಯಾಮೀನನ
ಗಿಬೆಯದಲ್ಲಿ ಯೋನಾತಾನನೊಂದಿಗೆ ಇದ್ದರು.
ಸೌಲನು ಸೈನ್ಯದಲ್ಲಿದ್ದ ಇತರರನ್ನು ಅವರವರ ಮನೆಗಳಿಗೆ
ಮರಳಿ ಕಳುಹಿಸಿದನು.
3ಯೋನಾತಾನನು ಫಿಲಿಷ್ಟಿಯರನ್ನು ಅವರ ಶಿಬಿರವಿದ್ದ
ಗೆಬದಲ್ಲಿ ಸೋಲಿಸಿದನು. ಫಿಲಿಷ್ಟಿಯರು ಈ ವಿಚಾರವನ್ನು
ಕೇಳಿ, ''ಇಬ್ರಿಯರು ದಂಗೆ ಎದ್ದಿದ್ದಾರೆ'' ಎಂದು
ಹೇಳಿದರು.

ಸೌಲನು, ''ಏನು ನಡೆಯಿತೆಂಬುದು ಇಬ್ರಿಯರಿಗೆ
ತಿಳಿಯಲಿ ''ಎಂದು ಹೇಳಿದನು. ಆದುದರಿಂದ ಸೌಲನು
ಇಸ್ರೇಲ್ ದೇಶದಲ್ಲೆಲ್ಲಾ ಕೊಂಬೂದಿಸಬೇಕೆಂದು
ಜನರಿಗೆ ಹೇಳಿದನು. 4ಇಸ್ರೇಲರೆಲ್ಲರೂ ಈ ಸುದ್ದಿಯನ್ನು
ಕೇಳಿ, ''ಸೌಲನು ಫಿಲಿಷ್ಟಿಯರ ನಾಯಕನನ್ನು
ಕೊಂದನು. ಈಗ ಫಿಲಿಷ್ಟಿಯರು ಇಸ್ರೇಲರನ್ನು ನಿಜ
ವಾಗಿಯೂ ದ್ವೇಷಿಸುತ್ತಾರೆ'' ಎಂದು ಹೇಳಿದರು.
ಇಸ್ರೇಲರೆಲ್ಲ ಗಿಲ್ಗಾಲಿನಲ್ಲಿ ಸೌಲನನ್ನು ಜೊತೆಸೇರಲು
ಕರೆಹೋಯಿತು. 5ಫಿಲಿಷ್ಟಿಯರು ಇಸ್ರೇಲರೊಡನೆ
ಹೋರಾಡಲು ಒಟ್ಟುಗೂಡಿದರು. ಫಿಲಿಷ್ಟಿಯರಲ್ಲಿ
ಮೂರು ಸಾವಿರ ರಥಗಳಿದ್ದವು; ಆರು ಸಾವಿರ ಅಶ್ವಸೈನಿಕ
ರಿದ್ದರು. ಫಿಲಿಷ್ಟಿಯರಲ್ಲಿ ನದಿದಂಡೆಯ ಮರಳಿನ
ಕಣಗಳಷ್ಟು ಯೋಧರಿದ್ದರು. ಫಿಲಿಷ್ಟಿಯರು ಮಿಕ್ಮಾಷಿ
ನಲ್ಲಿ ಪಾಳೆಯಮಾಡಿಕೊಂಡರು. (ಬೇತಾವೆನಿನ ಪೂರ್ವ
ದಿಕ್ಕಿನಲ್ಲಿ ಮಿಕ್ಮಾಷ್ ಇದೆ.)
6ಇಸ್ರೇಲರು ತಾವು ತೊಂದರೆಗೆ ಒಳಗಾಗಿರುವುದನ್ನೂ
ಇಕ್ಕಟ್ಟಿನಲ್ಲಿ ಸಿಕ್ಕಿಬಿದ್ದಿರುವುದನ್ನೂ ತಿಳಿದುಕೊಂಡರು.
ಅವರು ಗವಿಗಳಲ್ಲಿ ಮತ್ತು ಬಂಡೆಗಲ್ಲುಗಳ ಸಂಧಿಗಳಲ್ಲಿ
ಅಡಗಿಕೊಳ್ಳಲು ಓಡಿಹೋದರು. ಅವರು ಬಂಡೆಗಳ
ಮಧ್ಯದಲ್ಲಿಯೂ ಬಾವಿಗಳಲ್ಲಿಯೂ ಮತ್ತು ನೆಲದ ಕುಳಿ
ಗಳಲ್ಲಿಯೂ ಅಡಗಿಕೊಂಡರು. 7ಇಬ್ರಿಯರಲ್ಲಿ ಕೆಲವರು
ಜೋರ್ಡನ್ ನದಿಯನ್ನು ದಾಟಿ ಗಾದ್ ಮತ್ತು ಗಿಲ್ಯಾದ್
ಪ್ರದೇಶಕ್ಕೆ ಹೊರಟುಹೋದರು. ಸೌಲನು ಇನ್ನೂ
ಗಿಲ್ಗಾಲಿನಲ್ಲೇ ಇದ್ದನು. ಅವನ ಸೈನ್ಯದಲ್ಲಿದ್ದ ಜನರೆಲ್ಲ
ಭಯದಿಂದ ನಡುಗತೊಡಗಿದರು.
8ಸಮುವೇಲನು ತಾನು ಸೌಲನನ್ನು ಗಿಲ್ಗಾಲಿನಲ್ಲಿ
ಭೇಟಿಮಾಡುವುದಾಗಿ ಹೇಳಿಕಳುಹಿಸಿದನು. ಆದ್ದರಿಂದ
ಸೌಲನು ಏಳು ದಿನಗಳವರೆಗೆ ಅಲ್ಲಿ ಕಾದುಕೊಂಡಿದ್ದನು.
ಆದರೆ ಸಮುವೇಲನು ಗಿಲ್ಗಾಲಿಗೆ ಬರುವುದಕ್ಕಿಂತ
ಮೊದಲೇ ಸೈನಿಕರು ಸೌಲನನ್ನು ಬಿಟ್ಟುಹೋಗ
ತೊಡಗಿದರು. 9ಆದುದರಿಂದ ಸೌಲನು, ''ಸರ್ವಾಂಗ
ಹೋಮಕ್ಕೂ ಸಮಾಧಾನಯಜ್ಞಕ್ಕೂ ಬೇಕಾದವುಗಳನ್ನು
ತನ್ನಿ'' ಎಂದು ಹೇಳಿದನು. ಬಳಿಕ ಸೌಲನು ಸರ್ವಾಂಗ
ಹೋಮವನ್ನು ಅರ್ಪಿಸಿದನು. 10ಸೌಲನು ಸರ್ವಾಂಗ
ಹೋಮವನ್ನು ಅರ್ಪಿಸಿ ಮುಗಿಸುವಷ್ಟರಲ್ಲೇ ಸಮು
ವೇಲನು ಬಂದನು. ಸೌಲನು ಅವನನ್ನು ವಂದಿಸಲು
ಹೊರಗೆ ಹೋದನು.
11ಸಮುವೇಲನು, ''ನೀನು ಮಾಡಿದ್ದೇನು?'' ಎಂದು
ಕೇಳಿದನು.
ಸೌಲನು, ''ಸೈನಿಕರು ನನ್ನನ್ನು ಬಿಟ್ಟುಹೋಗುತ್ತಿರು
ವುದನ್ನೂ ನೀನು ನಿಯಮಿತಕಾಲದಲ್ಲಿ ಇಲ್ಲಿ ಇಲ್ಲದಿರು
ವುದನ್ನೂ ಫಿಲಿಷ್ಟಿಯರು ಮಿಕ್ಮಾಷಿನಲ್ಲಿ ಒಟ್ಟುಗೂಡು
ತ್ತಿರುವುದನ್ನೂ ನೋಡಿದೆನು. 12ನಾನು ನನ್ನಲ್ಲಿಯೇ

ಯೋಚಿಸುತ್ತಾ, ‘ಫಿಲಿಷ್ಟಿಯರು ಇಲ್ಲಿಗೆ ಬಂದು
ಗಿಲ್ಗಾಲಿನಲ್ಲಿ ನನ್ನ ಮೇಲೆ ಆಕ್ರಮಣ ಮಾಡುತ್ತಾರೆ.
ನಮಗೆ ಸಹಾಯ ಮಾಡುವಂತೆ ನಾನು ದೇವರಲ್ಲಿ ಇನ್ನೂ
ಪ್ರಾರ್ಥಿಸಿಲ್ಲ. ಆದುದರಿಂದ ನನ್ನಲ್ಲಿಯೇ ಆದ ಒತ್ತಡ
ದಿಂದ ಸರ್ವಾಂಗಹೋಮವನ್ನು ಅರ್ಪಿಸಿದೆನು’’
ಎಂದನು.

13ಸಮುವೇಲನು, ‘‘ನೀನು ಬುದ್ಧಿಹೀನಕಾರ್ಯವನ್ನು
ಮಾಡಿದೆ. ನಿನ್ನ ದೇವರಾದ ಯೆಹೋವನ ಆಜ್ಞೆಗೆ ನೀನು
ವಿಧೇಯನಾಗಲಿಲ್ಲ. ನೀನು ಯೆಹೋವನ ಆಜ್ಞೆಗೆ
ವಿಧೇಯನಾಗಿದ್ದರೆ, ನಿನ್ನ ಕುಟುಂಬವು ಇಸ್ರೇಲನ್ನು
ಶಾಶ್ವತವಾಗಿ ಆಳುವಂತೆ ಯೆಹೋವನು ಮಾಡುತ್ತಿದ್ದನು.
14ಆದರೆ ಈಗ ನಿನ್ನ ಆಳ್ವಿಕೆಯು ಮುಂದುವರಿಯು
ವುದಿಲ್ಲ. ಯೆಹೋವನು ತನಗೆ ವಿಧೇಯನಾಗಿರುವಂತಹ
ಮನುಷ್ಯನಿಗಾಗಿ ಹುಡುಕುತ್ತಿದ್ದನು. ಯೆಹೋವನಿಗೆ
ಅಂತಹ ಮನುಷ್ಯನು ಸಿಕ್ಕಿದ್ದಾನೆ. ತನ್ನ ಜನರನ್ನು ಆಳಲು
ಯೆಹೋವನು ಅವನನ್ನು ಹೊಸ ನಾಯಕನನ್ನಾಗಿ
ನೇಮಿಸುತ್ತಾನೆ. ನೀನು ಯೆಹೋವನ ಆಜ್ಞೆಗೆ ವಿಧೇಯ
ನಾಗಲಿಲ್ಲ. ಆದ್ದರಿಂದ ಯೆಹೋವನು ಹೊಸ ನಾಯಕ
ನನ್ನು ಆರಿಸಿಕೊಳ್ಳುವನು’’ ಎಂದು ಹೇಳಿದನು. 15ನಂತರ
ಸಮುವೇಲನು ಎದ್ದು ಗಿಲ್ಗಾಲನ್ನು ಬಿಟ್ಟುಹೊರಟನು.

## ಮಿಕ್ಮಾಷಿನ ಕದನ

ಸೌಲನು ತನ್ನ ಸೈನ್ಯಸಮೇತವಾಗಿ ಗಿಲ್ಗಾಲಿನಿಂದ
ಹೊರಟನು. ಅವರು ಬೆನ್ಯಾಮೀನ್ ಪ್ರಾಂತ್ಯದ ಗಿಬೆ
ಯಕ್ಕೆ ಹೋದರು. ಸೌಲನು ತನ್ನೊಂದಿಗೆ ಇನ್ನೂ ಇದ್ದ
ಜನರನ್ನು ಲೆಕ್ಕ ಹಾಕಿದನು. ಅವನ ಜೊತೆಯಲ್ಲಿ ಆರು
ನೂರು ಜನರಿದ್ದರು. 16ಸೌಲನು ಮತ್ತು ಅವನ ಮಗ
ನಾದ ಯೋನಾತಾನನು ಮತ್ತು ಸೈನಿಕರು ಬೆನ್ಯಾಮೀನ್
ಪ್ರಾಂತ್ಯದ ಗಿಬೆಯಕ್ಕೆ ಹೋದರು.

ಫಿಲಿಷ್ಟಿಯರು ಮಿಕ್ಮಾಷಿನಲ್ಲಿ ಪಾಳೆಯ ಮಾಡಿಕೊಂಡಿ
ದ್ದರು. 17ಆ ಪ್ರದೇಶದಲ್ಲಿ ವಾಸಿಸುತ್ತಿದ್ದ ಇಸ್ರೇಲರನ್ನು
ಶಿಕ್ಷಿಸಲು ಫಿಲಿಷ್ಟಿಯರು ತೀರ್ಮಾನಿಸಿದ್ದರು. ಆದುದ
ರಿಂದ ಅವರ ಬಲಿಷ್ಠ ಸೈನ್ಯವು ಆಕ್ರಮಣಕ್ಕಾಗಿ ಆ ಸ್ಥಳವನ್ನು
ಬಿಟ್ಟುಹೊರಟಿತು. ಫಿಲಿಷ್ಟಿಯ ಸೈನವನ್ನು ಮೂರು
ಗುಂಪುಗಳನ್ನಾಗಿ ಮಾಡಲಾಯಿತು. ಒಂದು ಗುಂಪು
ಉತ್ತರದಿಕ್ಕಿನ ಒಫ್ರದ ಮಾರ್ಗವಾಗಿ ಶುವಲ್ ದೇಶಕ್ಕೆ
ಹೊರಟಿತು. 18ಎರಡನೆ ಗುಂಪು ಈಶಾನ್ಯದಿಕ್ಕಿನ ಮಾರ್ಗ
ವಾಗಿ ಬೇತ್‌ಹೋರೋನಿನ ಕಡೆಗೆ ಹೊರಟಿತು. ಆ
ಮೂರನೆಯ ಗುಂಪು ಪೂರ್ವದಿಕ್ಕಿನ ಗಡಿಪ್ರದೇಶದ
ಕಡೆಗೆ ಹೊರಟಿತು. ಆ ರಸ್ತೆಯು ಜೆಬೋಯೀಮ್
ಕಣಿವೆಯ ಮರುಭೂಮಿಯ ಕಡೆಗೆ ಹೋಗುತ್ತಿತ್ತು.

19ಕಬ್ಬಿಣದಿಂದ ಆಯುಧಗಳನ್ನು ತಯಾರಿಸಲು
ಇಸ್ರೇಲರಿಗೆ ಗೊತ್ತಿರಲಿಲ್ಲ. ಇಸ್ರೇಲಿನಲ್ಲಿ ಯಾವ
ಕಮ್ಮಾರರೂ ಇರಲಿಲ್ಲ. ಇಸ್ರೇಲರು ಕಬ್ಬಿಣದಿಂದ ಕತ್ತಿ
ಗಳನ್ನು ಮತ್ತು ಈಟಿಗಳನ್ನು ತಯಾರಿಸಬಹುದೆಂಬ
ಭೀತಿಯು ಫಿಲಿಷ್ಟಿಯರಿಗೆ ಇದ್ದಕಾರಣ ಅವರು ಇಸ್ರೇಲ
ರಿಗೆ ಕಬ್ಬಿಣದಿಂದ ತಯಾರಿಸುವ ವಸ್ತುಗಳ ಬಗ್ಗೆ ತಿಳುವಳಿಕೆ
ನೀಡಿರಲಿಲ್ಲ. 20ಫಿಲಿಷ್ಟಿಯರು ಮಾತ್ರ ಕಬ್ಬಿಣದ ವಸ್ತು
ಗಳನ್ನು ಹರಿತಗೊಳಿಸುತ್ತಿದ್ದರು. ಆದುದರಿಂದ
ಇಸ್ರೇಲರು ತಮ್ಮ ನೇಗಿಲುಗಳನ್ನು, ಗುದ್ದಲಿಗಳನ್ನು,
ಸಲಿಕೆಗಳನ್ನು ಮತ್ತು ಕೊಡಲಿಗಳನ್ನು ಹರಿತಗೊಳಿಸಲು
ಫಿಲಿಷ್ಟಿಯರ ಹತ್ತಿರಕ್ಕೆ ಹೋಗಬೇಕಾಗಿತ್ತು. 21ಫಿಲಿಷ್ಟಿ
ಯರ ಕಮ್ಮಾರರು ನೇಗಿಲನ್ನಾಗಲೀ ಕಳೆಗುದ್ದಲಿಗಳ
ನ್ನಾಗಲೀ ಹರಿತಗೊಳಿಸಲು 1/3 ತೊಲ ಬೆಳ್ಳಿಯನ್ನು
ದರವಾಗಿ ತೆಗೆದುಕೊಳ್ಳುತ್ತಿದ್ದರು; ಸಲಿಕೆಯನ್ನಾಗಲೀ
ಕೊಡಲಿಯನ್ನಾಗಲೀ ನೇಗಿಲಿನ ಗುಳವನ್ನಾಗಲೀ ಹರಿತ
ಗೊಳಿಸಲು 1/6 ತೊಲ ಬೆಳ್ಳಿಯನ್ನು ತೆಗೆದುಕೊಳ್ಳು
ತ್ತಿದ್ದರು. 22ಆದುದರಿಂದ ಯುದ್ಧದ ದಿನ ಸೌಲನ ಬಳಿ
ಯಿದ್ದ ಸೈನಿಕರಲ್ಲಿ ಯಾರ ಹತ್ತಿರವೂ ಕತ್ತಿಯಾಗಲೀ
ಈಟಿಯಾಗಲೀ ಇರಲಿಲ್ಲ. ಸೌಲ ಮತ್ತು ಅವನ
ಮಗನಾದ ಯೋನಾತಾನನ ಹತ್ತಿರ ಮಾತ್ರ ಕಬ್ಬಿಣದ
ಆಯುಧಗಳಿದ್ದವು.

23ಫಿಲಿಷ್ಟಿಯರ ಸೈನ್ಯದ ಒಂದು ಗುಂಪು ಮಿಕ್ಮಾಷಿನ
ಕಣಿವೆಗೆ ಕಾವಲಾಗಿತ್ತು.

## ಯೋನಾತಾನನು ಮತ್ತು ಅವನ ಸಹಾಯಕನು ಫಿಲಿಷ್ಟಿಯರನ್ನು ಆಕ್ರಮಣ ಮಾಡುವರು

14 ಅಂದು ಸೌಲನು ಮಗನಾದ ಯೋನಾತಾನನು
ತನ್ನ ಆಯುಧಗಳನ್ನು ಹೊತ್ತು ತರುವ ಯುವಕ
ನೊಂದಿಗೆ ಮಾತನಾಡುತ್ತಾ, ‘‘ಕಣಿವೆಯ ಆಚೆಗಿರುವ
ಫಿಲಿಷ್ಟಿಯರ ಪಾಳೆಯಕ್ಕೆ ಹೋಗೋಣ’’ ಎಂದು
ಹೇಳಿದನು. ಆದರೆ ಯೋನಾತಾನನು ತನ್ನ ತಂದೆಗೆ
ಇದನ್ನು ತಿಳಿಸಲಿಲ್ಲ.

2ಸೌಲನು ಮಿಗ್ರೋನಿನ ಬೆಟ್ಟದ ತುದಿಯಲ್ಲಿರುವ
ಒಂದು ದಾಳಿಂಬೆ ಮರದ ಅಡಿಯಲ್ಲಿ ಕುಳಿತಿದ್ದನು. ಅದು
ಆ ಸ್ಥಳದ ಕಣಕ್ಕೆ ಸಮೀಪವಾಗಿತ್ತು. ಸೌಲನ ಜೊತೆಯಲ್ಲಿ
ಆರುನೂರು ಜನರಿದ್ದರು. 3ಅವರಲ್ಲಿ ಅಹೀಯನೂ
ಒಬ್ಬನು. ಶೀಲೋವಿನಲ್ಲಿ ಏಲಿಯು ಯೆಹೋವನ
ಯಾಜಕನಾಗಿದ್ದನು. ಏಫೋದನ್ನು ಧರಿಸಿದ್ದ ಅಹೀ
ಯನು ಆಗ ಅಲ್ಲಿ ಯಾಜಕನಾಗಿದ್ದನು. ಅಹೀಯನು
ಈಕಾಬೋದನ ಸೋದರನಾದ ಅಹೀಟೂಬನ ಮಗ.
ಈಕಾಬೋದನು ಫೀನೆಹಾಸನ ಮಗ. ಫೀನೆಹಾಸನು
ಏಲಿಯ ಮಗ. ಯೋನಾತಾನನು ಹೊರಟು ಹೋದ
ನೆಂಬುದು ಜನರಿಗೆ ಗೊತ್ತಿರಲಿಲ್ಲ.

4ಆ ಮಾರ್ಗದ ಎರಡು ಕಡೆಗಳಲ್ಲೂ ದೊಡ್ಡ ದೊಡ್ಡ
ಬಂಡೆಗಲ್ಲುಗಳಿದ್ದವು. ಯೋನಾತಾನನು ಫಿಲಿಷ್ಟಿಯರ

ಪಾಳೆಯಕ್ಕೆ ಆ ಮಾರ್ಗದಲ್ಲಿ ಹೋಗಲು ಉಪಾಯ
ಮಾಡಿದನು. ಆ ಮಾರ್ಗದ ಒಂದು ಕಡೆಗಿದ್ದ ಬಂಡೆಗಲ್ಲಿಗೆ
ಬೋಚೇಚ್ ಎಂದು ಹೆಸರು; ಇನ್ನೊಂದು ಕಡೆಗಿದ್ದ
ಬಂಡೆಗಲ್ಲಿಗೆ ಸೆನೆ ಎಂದು ಹೆಸರು. 5ಒಂದು ಬಂಡೆಗಲ್ಲು
ಉತ್ತರದಿಕ್ಕಿನ ಮಿಕ್ಮಾಷಿನ ಕಡೆಗೂ ಇನ್ನೊಂದು ಬಂಡೆ
ಗಲ್ಲು ದಕ್ಷಿಣದಿಕ್ಕಿನ ಗೆಬದ ಕಡೆಗೂ ಇದ್ದವು.

6ಯೋನಾತಾನನು ತನ್ನ ಆಯುಧಗಳನ್ನು ಹೊತ್ತು
ಕೊಂಡು ಬರುತ್ತಿದ್ದ ಯುವಸಹಾಯಕನಿಗೆ, ''ಆ ಹೊರ
ದೇಶೀಯರ ಪಾಳೆಯಕ್ಕೆ ಹೋಗೋಣ ಬಾ. ಈ ಜನ
ರನ್ನು ಸೋಲಿಸಲು ಯೆಹೋವನು ಬಹುಶಃ ನಮ್ಮನ್ನು
ಬಳಸಬಹುದು.ಯೆಹೋವನನ್ನು ತಡೆಯಲು ಯಾರಿಗೂ
ಸಾಧ್ಯವಿಲ್ಲ. ನಮ್ಮಲ್ಲಿ ಅನೇಕ ಸೈನಿಕರಿದ್ದರೂ ಇಲ್ಲವೆ
ಕೆಲವೇ ಸೈನಿಕರಿದ್ದರೂ ಅದು ಲೆಕ್ಕಕ್ಕೆ ಬರುವುದಿಲ್ಲ''
ಎಂದು ಹೇಳಿದನು.

7ಯೋನಾತಾನನ ಆಯುಧಗಳನ್ನು ಹೊತ್ತುಕೊಂಡು
ಬರುತ್ತಿದ್ದ ಯುವಕನು, ''ನಿನಗೆ ಒಳ್ಳೆಯದೆಂದು ತೋಚಿ
ದ್ದನ್ನು ಮಾಡು. ನಿನ್ನ ಕೆಲಸದಲ್ಲೆಲ್ಲಾ ನಾನು ನಿನ್ನೊಂದಿಗಿ
ರುತ್ತೇನೆ'' ಎಂದು ಹೇಳಿದನು.

8ಯೋನಾತಾನನು, ''ನಾವು ಕಣಿವೆಯನ್ನು ದಾಟಿ
ಫಿಲಿಷ್ಟಿಯ ಕಾವಲುಗಾರರ ಕಡೆಗೆ ಹೋಗಿ ಅವರಿಗೆ
ಕಾಣಿಸಿಕೊಳ್ಳೋಣ. 9ಅವರು, 'ನಾವು ಬರುವ ತನಕ
ನೀವು ಅಲ್ಲೇ ನಿಲ್ಲಿ' ಎಂದು ಹೇಳಿದರೆ, ನಾವು ನಿಂತಲ್ಲೇ
ನಿಲ್ಲೋಣ. ನಾವು ಮೇಲೆ ಹತ್ತಿ ಅವರ ಹತ್ತಿರಕ್ಕೆ ಹೋಗು
ವುದು ಬೇಡ. 10ಆದರೆ ಫಿಲಿಷ್ಟಿಯರು, 'ನಮ್ಮ ಬಳಿಗೆ ಹತ್ತಿ
ಬನ್ನಿ' ಎಂದರೆ, ನಾವು ಅವರ ಬಳಿಗೆ ಹತ್ತಿ ಹೋಗೋಣ;
ಯಾಕೆಂದರೆ ಅದು ದೇವರ ಗುರುತು. ದೇವರು ಅವರನ್ನು
ಸೋಲಿಸಲು ನಮಗೆ ಅವಕಾಶ ಕಲ್ಪಿಸಿದ್ದಾನೆ ಎಂಬುದೇ
ಅದರ ಅರ್ಥ'' ಎಂದು ಹೇಳಿದನು.

11ಹೀಗೆ ಯೋನಾತಾನ ಮತ್ತು ಅವನ ಸಹಾಯಕನು
ಫಿಲಿಷ್ಟಿಯರಿಗೆ ಕಾಣಿಸಿಕೊಂಡರು. ಫಿಲಿಷ್ಟಿಯರ ಕಾವಲು
ಗಾರರು, ''ಇಗೋ, ಇಬ್ರಿಯರು ತಾವು ಅಡಗಿಕೊಂಡಿದ್ದ
ಗುಹೆಗಳಿಂದ ಹೊರಬರುತ್ತಿದ್ದಾರೆ'' ಎಂದು ಹೇಳಿದರು.
12ಆ ಕೋಟೆಯಲ್ಲಿದ್ದ ಫಿಲಿಷ್ಟಿಯರು ಯೋನಾತಾನ
ಮತ್ತು ಅವನ ಸಹಾಯಕನಿಗೆ, ''ನಮ್ಮ ಹತ್ತಿರಕ್ಕೆ ಬನ್ನಿ.
ನಾವು ನಿಮಗೆ ಒಂದು ಪಾಠ ಕಲಿಸುತ್ತೇವೆ''ಎಂದು ಕೂಗಿ
ಹೇಳಿದರು.

ಯೋನಾತಾನನು ತನ್ನ ಸಹಾಯಕನಿಗೆ, ''ಬೆಟ್ಟದ
ಮೇಲಿನವರೆಗೆ ನನ್ನನ್ನು ಹಿಂಬಾಲಿಸು. ಯೆಹೋವನು
ಇಸ್ರೇಲರ ವಶಕ್ಕೆ ಫಿಲಿಷ್ಟಿಯರನ್ನು ಒಪ್ಪಿಸಿದ್ದಾನೆ'' ಎಂದು
ಹೇಳಿದನು.

13-14ಯೋನಾತಾನನು ತನ್ನ ಕೈಕಾಲುಗಳಿಂದ ಬೆಟ್ಟ
ವನ್ನು ಹತ್ತಿದನು. ಅವನನ್ನು ಹಿಂಬಾಲಿಸಿಕೊಂಡು ಅವನ
ಸಹಾಯಕನೂ ಬೆಟ್ಟವನ್ನು ಹತ್ತಿದನು. ಯೋನಾತಾನ
ಮತ್ತು ಅವನ ಸಹಾಯಕನು ಫಿಲಿಷ್ಟಿಯರ ಮೇಲೆ
ಆಕ್ರಮಣ ಮಾಡಿದರು ಅವರು ಮೊದಲ ಆಕ್ರಮಣದಲ್ಲಿ
ಅರ್ಧಎಕರೆ ಸ್ಥಳದಲ್ಲಿದ್ದ ಇಪ್ಪತ್ತು ಮಂದಿ ಫಿಲಿಷ್ಟಿಯರನ್ನು
ಕೊಂದರು. ಆಕ್ರಮಣ ಮಾಡಲು ಬಂದವರೊಡನೆ
ಯೋನಾತಾನನು ಮುಖಾಮುಖಿಯಾಗಿ ಹೋರಾಡಿ
ದನು. ಯೋನಾತಾನನ ಸಹಾಯಕನು ಅವನ ಹಿಂದೆ
ಬರುತ್ತಾ ಗಾಯಾಳುಗಳನ್ನು ಕೊಂದನು.

15ಹೊರವಲಯದ ಪಾಳೆಯದಲ್ಲಿದ್ದ ಮತ್ತು ಕೋಟೆ
ಯಲ್ಲಿದ್ದ ಎಲ್ಲಾ ಫಿಲಿಷ್ಟಿಯ ಸೈನಿಕರು ಭಯದಿಂದ ನಡುಗಿ
ದರು. ಹೊಲದಲ್ಲಿದ್ದ ಸೈನಿಕರು ಸಹ ಹೆದರಿಕೊಂಡಿದ್ದರು.
ಅತ್ಯಂತ ಧೈರ್ಯವಂತರಾದ ಸೈನಿಕರು ಸಹ ಹೆದರಿ
ಕೊಂಡಿದ್ದರು. ಭೂಮಿಯು ನಡುಗಿದ್ದರಿಂದ ಫಿಲಿಷ್ಟಿಯ
ಸೈನಿಕರು ನಿಜವಾಗಿಯೂ ಹೆದರಿಕೊಂಡರು.

16ಫಿಲಿಷ್ಟಿಯ ಸೈನಿಕರು ದಿಕ್ಕುಪಾಲಾಗಿ ಚದರಿ ಓಡಿ
ಹೋಗುತ್ತಿರುವುದನ್ನು ಬೆನ್ಯಾಮೀನ್ ದೇಶದ ಗಿಬೆಯ
ದಲ್ಲಿದ್ದ ಸೌಲನ ಕಾವಲುಗಾರರು ನೋಡಿದರು.
17ಸೌಲನು ತನ್ನೊಡನೆ ಇದ್ದ ಸೈನಿಕರಿಗೆ, ''ಪಾಳೆಯದಲ್ಲಿ
ರುವ ಜನರನ್ನು ಲೆಕ್ಕಹಾಕಿ. ಯಾರು ಪಾಳೆಯದಿಂದ
ಹೊರಗೆ ಹೋಗಿದ್ದಾರೆ ಎಂಬುದನ್ನು ನಾನು ತಿಳಿಯ
ಬೇಕು'' ಎಂದು ಹೇಳಿದನು.

ಅವರು ಲೆಕ್ಕಹಾಕಿದಾಗ, ಯೋನಾತಾನನೂ ಅವನ
ಸಹಾಯಕನೂ ಹೊರಗೆ ಹೋಗಿರುವುದು ತಿಳಿಯಿತು.

18ಸೌಲನು ಅಹೀಯನಿಗೆ, ''ಯೆಹೋವನ ಪವಿತ್ರ
ಪೆಟ್ಟಿಗೆಯನ್ನು ತೆಗೆದುಕೊಂಡು ಬಾ'' ಎಂದು ಹೇಳಿದನು.
(ಆ ಸಮಯದಲ್ಲಿ ದೇವರ ಪವಿತ್ರ ಪೆಟ್ಟಿಗೆಯು ಇಸ್ರೇಲ
ರೊಂದಿಗೆ ಇತ್ತು.) 19ಸೌಲನು ಯಾಜಕನಾದ
ಅಹೀಯನ ಜೊತೆ ಮಾತನಾಡುತ್ತಿದ್ದನು. ಸೌಲನು
ಯೆಹೋವನ ಸಲಹೆಗಾಗಿ ಕಾಯುತ್ತಿದ್ದನು. ಆದರೆ
ಫಿಲಿಷ್ಟಿಯರ ಪಾಳೆಯದಲ್ಲಿ ಗದ್ದಲವೂ ಗಲಿಬಿಲಿಯೂ
ಹೆಚ್ಚತೊಡಗಿದವು. ಸೌಲನು ತಾಳ್ಮೆಯಿಲ್ಲದಂತಾದನು.
ಕೊನೆಯದಾಗಿ ಸೌಲನು ಯಾಜಕನಾದ ಅಹೀಯನಿಗೆ,
''ಅಷ್ಟೇಸಾಕು, ಕೈಗಳನ್ನು ಕೆಳಗಿಳಿಸಿ ಪ್ರಾರ್ಥನೆಯನ್ನು
ನಿಲ್ಲಿಸು'' ಎಂದು ಹೇಳಿದನು.

20ಸೌಲನು ಸೈನಿಕರನ್ನೆಲ್ಲ ಒಟ್ಟುಗೂಡಿಸಿಕೊಂಡು
ಯುದ್ಧಕ್ಕೆ ಹೋದನು. ಫಿಲಿಷ್ಟಿಯ ಸೈನಿಕರಲ್ಲಿ ನಿಜ
ವಾಗಿಯೂ ಗಲಿಬಿಲಿಯುಂಟಾಗಿತ್ತು. ಅವರು ತಮ್ಮ
ತಮ್ಮಲ್ಲಿಯೇ ಕತ್ತಿಗಳಿಂದ ಹೋರಾಡುತ್ತಿದ್ದರು. 21ಫಿಲಿಷ್ಟಿ
ಯರ ಸೇವೆಯಲ್ಲಿ ಮೊದಲಿಂದಲೂ ಇದ್ದ ಇಬ್ರಿಯರು
ಈಗಲೂ ಅವರ ಪಾಳೆಯದಲ್ಲಿದ್ದರು. ಆದರೆ ಆಗ ಈ
ಇಬ್ರಿಯರು ಸೌಲ ಮತ್ತು ಯೋನಾತಾನನೊಂದಿಗೆ
ಸೇರಿಕೊಂಡರು. 22ಫಿಲಿಷ್ಟಿಯ ಸೈನಿಕರು ಓಡಿಹೋಗು
ತ್ತಿರುವುದನ್ನು ಎಫ್ರಾಯೀಮ್ ಬೆಟ್ಟಪ್ರದೇಶದಲ್ಲಿ ಅಡಗಿ
ಕೊಂಡಿದ್ದ ಎಲ್ಲ ಇಸ್ರೇಲರೂ ಕೇಳಿದರು. ಆದುದರಿಂದ

ಆ ಇಸ್ರೇಲರೂ ಯುದ್ಧದಲ್ಲಿ ಭಾಗಿಗಳಾಗಿ ಫಿಲಿಷ್ಟಿಯರನ್ನು ಅಟ್ಟಿಸಿಕೊಂಡು ಹೋದರು.

23 ಹೀಗೆ ಯೆಹೋವನು ಅಂದು ಇಸ್ರೇಲರನ್ನು ರಕ್ಷಿಸಿದನು. ಯುದ್ಧವು ಬೇತಾವೆನಿನ ಆಚೆಯ ತನಕ ನಡೆಯಿತು. ಸೌಲನ ಬಳಿ ಒಟ್ಟು ಹತ್ತು ಸಾವಿರ ಮಂದಿ ಸೈನಿಕರಿದ್ದರು. ಎಫ್ರಾಯೀಮ್ ಬೆಟ್ಟಪ್ರದೇಶದ ಎಲ್ಲಾ ನಗರಗಳಿಗೂ ಯುದ್ಧವು ಹಬ್ಬಿತು.

## ಸೌಲನು ಮಾಡಿದ ಇನ್ನೊಂದು ತಪ್ಪು

24 ಆದರೆ ಸೌಲನು ಆ ದಿನ ಮತ್ತೊಂದು ದೊಡ್ಡ ತಪ್ಪನ್ನು ಮಾಡಿದನು. ಇಸ್ರೇಲರು ಬಳಲಿದ್ದರು ಮತ್ತು ಹಸಿದಿದ್ದರು. ಸೌಲನು ಅವರಿಗೆ, ‘‘ನಾನು ಶತ್ರುಗಳನ್ನು ಸೋಲಿಸಬೇಕಾಗಿರುವುದರಿಂದ ನಿಮ್ಮಲ್ಲಿ ಸಾಯಂಕಾಲದೊಳಗೆ ಊಟಮಾಡಿದವನು ಶಾಪಗ್ರಸ್ತನಾಗಲಿ’’ ಎಂದು ಆಣೆಯಿಟ್ಟು ಹೇಳಿದ್ದರಿಂದ ಇಸ್ರೇಲಿನ ಯಾವ ಸೈನಿಕನೂ ಊಟಮಾಡಲಿಲ್ಲ.

25-26 ಯುದ್ಧವು ನಡೆಯುತ್ತಲೇ ಇದ್ದುದರಿಂದ ಅವರೆಲ್ಲ ಕಾಡಿನೊಳಗೆ ಹೋದರು. ಅಲ್ಲಿ ನೆಲದ ಮೇಲೆಲ್ಲಾ ಇದ್ದ ಜೇನನ್ನು ನೋಡಿದರು. ಇಸ್ರೇಲರು ಜೇನು ಕಟ್ಟಿರುವ ಸ್ಥಳಕ್ಕೆ ಬಂದರು. ಅವರು ಹಸಿದಿದ್ದರೂ ಬಳಲಿದ್ದರೂ ಆ ಜೇನನ್ನು ತಿನ್ನಲಿಲ್ಲ. ತಾವು ಶಾಪಕ್ಕೆ ಗುರಿಯಾಗುತ್ತೇವೆ ಎಂಬ ಭಯ ಅವರಿಗಿತ್ತು.
27 ಆದರೆ ಯೋನಾತಾನನಿಗೆ ಈ ಶಾಪದ ಕುರಿತು ತಿಳಿದಿರಲಿಲ್ಲ; ತನ್ನ ತಂದೆಯು ಜನರಿಗೆ ಆಣೆಯಿಟ್ಟು ಹೇಳಿದ್ದೂ ಗೊತ್ತಿರಲಿಲ್ಲ. ಯೋನಾತಾನನ ಕೈಯಲ್ಲಿ ಒಂದು ಕೋಲಿತ್ತು. ಅವನು ಆ ಕೋಲನ್ನು ಜೇನುಗೂಡಿನಲ್ಲಿ ಚುಚ್ಚಿ ಸ್ವಲ್ಪ ಜೇನನ್ನು ತೆಗೆದುಕೊಂಡು ತಿಂದನು. ಆಗ ಅವನು ಸ್ವಲ್ಪ ಬಲಗೊಂಡನು.

28 ಸೈನಿಕನೊಬ್ಬ ಯೋನಾತಾನನಿಗೆ, ‘‘‘ಈ ದಿನ ಸಾಯಂಕಾಲದೊಳಗೆ ಊಟಮಾಡುವವನು ಶಾಪಗ್ರಸ್ತನಾಗಲಿ’ ಎಂದು ನಿಮ್ಮ ತಂದೆ ಆಣೆಯಿಟ್ಟು ಹೇಳಿದ್ದಾನೆ ಆದಕಾರಣವೇ ಸೈನಿಕರು ಬಲಹೀನರಾಗಿದ್ದಾರೆ.’’ ಎಂದು ತಿಳಿಸಿದನು.

29 ಬಳಲಿಹೋಗಿದ್ದ ಜನರನ್ನು ಕಂಡ ಯೋನಾತಾನನು, ‘‘ನನ್ನ ತಂದೆಯು ದೇಶಕ್ಕೆ ತೊಂದರೆ ಮಾಡಿದನು. ನಾನು ಸ್ವಲ್ಪ ಜೇನನ್ನು ತಿಂದ ಮೇಲೆ ಎಷ್ಟೋ ಚೈತನ್ಯ ಬಂದಿತು.
30 ಈ ದಿನ ಶತ್ರುಗಳಿಂದ ವಶಪಡಿಸಿಕೊಂಡ ಆಹಾರವನ್ನು ತಿನ್ನಲು ಜನರಿಗೆ ಅವಕಾಶ ಕೊಟ್ಟಿದ್ದರೆ ಬಹಳ ಒಳ್ಳೆಯದಾಗುತ್ತಿತ್ತು; ನಾವು ಮತ್ತಷ್ಟು ಫಿಲಿಷ್ಟಿಯರನ್ನು ಕೊಲ್ಲಬಹುದಾಗಿತ್ತು’’ ಎಂದು ಹೇಳಿದನು.

31 ಅಂದು ಇಸ್ರೇಲರು ಫಿಲಿಷ್ಟಿಯರನ್ನು ಸೋಲಿಸಿದರು. ಅವರು ಮಿಕ್ಮಾಷಿನಿಂದ ಅಯ್ಯಾಲೋನಿನವರೆಗೂ ದಾರಿಯುದ್ದಕ್ಕೂ ಹೋರಾಡಿದರು. ಆದಕಾರಣ ಜನರು ಬಹಳವಾಗಿ ಬಳಲಿದ್ದರು ಮತ್ತು ಹಸಿದಿದ್ದರು.
32 ಅವರು ಫಿಲಿಷ್ಟಿಯರಿಂದ ಕುರಿಗಳನ್ನೂ ದನಕರುಗಳನ್ನೂ ಕೊಳ್ಳೆಹೊಡೆದಿದ್ದರು. ಆಗ ಇಸ್ರೇಲರು ಎಷ್ಟು ಹಸಿದಿದ್ದರೆಂದರೆ ಆ ಪಶುಗಳನ್ನು ನೆಲದ ಮೇಲೆಯೇ ಕೊಂದು ಅವುಗಳ ಮಾಂಸವನ್ನು ತಿಂದರು. ಆ ಮಾಂಸದಲ್ಲಿ ಇನ್ನೂ ರಕ್ತವಿತ್ತು.
33 ಒಬ್ಬನು ಸೌಲನಿಗೆ, ‘‘ಜನರೆಲ್ಲ ಯೆಹೋವನಿಗೆ ವಿರೋಧವಾಗಿ ಪಾಪ ಮಾಡುತ್ತಿದ್ದಾರೆ. ಅವರು ಮಾಂಸವನ್ನು ರಕ್ತಸಮೇತವಾಗಿ ತಿನ್ನುತ್ತಿದ್ದಾರೆ’’ ಎಂದು ಹೇಳಿದನು.

ಅದಕ್ಕೆ ಸೌಲನು, ‘‘ಅದು ಪಾಪವೇ ಹೌದು! ಈಗ ನೀನು ಒಂದು ದೊಡ್ಡ ಕಲ್ಲನ್ನು ಇಲ್ಲಿಗೆ ಉರುಳಿಸಿದ ನಂತರ
34 ಜನರ ಹತ್ತಿರಕ್ಕೆ ಹೋಗಿ, ‘ನಿಮ್ಮ ದನಕುರಿಗಳನ್ನು ಇಲ್ಲಿಗೆ ತಂದು ಕೊಯ್ದು ತಿನ್ನಬೇಕೆಂದೂ ಮಾಂಸವನ್ನು ರಕ್ತ ಸಮೇತವಾಗಿ ತಿಂದು ಯೆಹೋವನಿಗೆ ವಿರೋಧವಾಗಿ ಪಾಪಮಾಡಬಾರದೆಂದೂ ತಿಳಿಸು’’’ ಎಂದು ಹೇಳಿ ಕಳುಹಿಸಿದನು.

ಆ ರಾತ್ರಿ ಎಲ್ಲರೂ ಅವರವರ ಪಶುಗಳನ್ನು ಅಲ್ಲಿಗೆ ತಂದು ಕೊಂದರು.
35 ಸೌಲನು ಯೆಹೋವನಿಗಾಗಿ ಒಂದು ಯಜ್ಞವೇದಿಕೆಯನ್ನು ನಿರ್ಮಿಸಿದನು. ಯೆಹೋವನಿಗಾಗಿ ಆ ಯಜ್ಞವೇದಿಕೆಯನ್ನು ಸ್ವತಃ ಸೌಲನೇ ಕಟ್ಟಿದನು.

36 ಸೌಲನು, ‘‘ಈ ರಾತ್ರಿಯೇ ಫಿಲಿಷ್ಟಿಯರ ಬೆನ್ನಟ್ಟೋಣ. ಅವರಲ್ಲಿರುವುದನ್ನೆಲ್ಲ ವಶಪಡಿಸಿಕೊಂಡು ಅವರನ್ನೆಲ್ಲ ಕೊಲ್ಲೋಣ’’ ಎಂದು ಹೇಳಿದನು.

ಸೈನಿಕರು, ‘‘ನಿನಗೆ ಸರಿಕಂಡದ್ದನ್ನು ಮಾಡು’’ ಎಂದು ಉತ್ತರಕೊಟ್ಟರು.

ಆದರೆ ಯಾಜಕನು, ‘‘ದೇವರನ್ನು ಕೇಳೋಣ’’ ಎಂದು ಹೇಳಿದನು.

37 ಆದುದರಿಂದ ಸೌಲನು ದೇವರನ್ನು, ‘‘ನಾನು ಫಿಲಿಷ್ಟಿಯರನ್ನು ಅಟ್ಟಿಸಿಕೊಂಡು ಹೋಗಬೇಕೇ? ನಾವು ಫಿಲಿಷ್ಟಿಯರನ್ನು ಸೋಲಿಸುವಂತೆ ನೀನು ಮಾಡುವಿಯೋ?’’ ಎಂದು ಕೇಳಿದನು. ಆದರೆ ದೇವರು ಆ ದಿನ ಸೌಲನಿಗೆ ಉತ್ತರಿಸಲಿಲ್ಲ.

38 ಸೌಲನು, ‘‘ಎಲ್ಲಾ ನಾಯಕರನ್ನೂ ನನ್ನ ಹತ್ತಿರಕ್ಕೆ ಕರೆದು ತನ್ನಿ. ಈ ದಿನ ಯಾರು ಪಾಪ ಮಾಡಿದ್ದಾರೆಂಬುದನ್ನು ಗುರುತಿಸೋಣ.
39 ಇಸ್ರೇಲನ್ನು ರಕ್ಷಿಸುವ ಯೆಹೋವನಾಣೆಯಿಟ್ಟು ಹೇಳುತ್ತಿದ್ದೇನೆ, ನನ್ನ ಸ್ವಂತ ಮಗನಾದ ಯೋನಾತಾನನೇ ಈ ಪಾಪ ಮಾಡಿದ್ದರೂ ಅವನು ಸಾಯಲೇಬೇಕು’’ಎಂದು ಹೇಳಿದನು. ಸೈನಿಕರಲ್ಲಿ ಯಾರೊಬ್ಬರೂ ಮಾತನಾಡಲಿಲ್ಲ.

40 ಆಗ ಸೌಲನು, ‘‘ನೀವು ಈ ಕಡೆ ನಿಲ್ಲಿ. ನಾನು ಮತ್ತು ನನ್ನ ಮಗನಾದ ಯೋನಾತಾನನು ಆ ಕಡೆ ನಿಲ್ಲುತ್ತೇವೆ’’ ಎಂದು ಇಸ್ರೇಲರಿಗೆಲ್ಲ ಹೇಳಿದನು.

ಸೈನಿಕರೆಲ್ಲ ‘‘ನಿಮ್ಮ ಇಷ್ಟದಂತಾಗಲಿ, ಸ್ವಾಮಿ’’
ಎಂದರು.
41ಆಗ ಸೌಲನು, ‘‘ಇಸ್ರೇಲಿನ ದೇವರಾದ
ಯೆಹೋವನೇ, ನಾನು ನಿನ್ನ ಸೇವಕ. ಈ ದಿನ ನೀನು
ನನಗೇಕೆ ಉತ್ತರಿಸಲಿಲ್ಲ? ನಾನಾಗಲೀ ನನ್ನ ಮಗನಾದ
ಯೋನಾತಾನನಾಗಲೀ ಇಸ್ರೇಲರಾಗಲೀ ಪಾಪ
ಮಾಡಿದ್ದರೆ ಅದನ್ನು ನಮಗೆ ತಿಳಿಸಿಕೊಡು’’ ಎಂದು
ಪ್ರಾರ್ಥಿಸಿದನು.

ಚೀಟುಹಾಕಿದಾಗ ಅದು ಸೌಲನಿಗೂ ಯೋನಾತಾನ
ನಿಗೂ ಬಂದಿತು. ಜನರೆಲ್ಲಾ ಬಿಡುಗಡೆಗೊಂಡರು.
42ಸೌಲನು, ‘‘ಪಾಪ ಮಾಡಿದವರು ನಾನೋ ಅಥವಾ
ನನ್ನ ಮಗ ಯೋನಾತಾನನೋ ಎಂಬುದನ್ನು ತೋರಿ
ಸಲು ಚೀಟುಹಾಕಿರಿ’’ ಎಂದು ಹೇಳಿದನು. ಚೀಟು
ಯೋನಾತಾನನಿಗೆ ಬಂದಿತು.
43ಸೌಲನು ಯೋನಾತಾನನಿಗೆ, ‘‘ನೀನು ಏನು
ಮಾಡಿದೆಯೆಂಬುದನ್ನು ನನಗೆ ತಿಳಿಸು’’ ಎಂದು ಕೇಳಿ
ದನು. ಯೋನಾತಾನನು ಸೌಲನಿಗೆ, ‘‘ನಾನು ನನ್ನ
ಕೋಲಿನ ತುದಿಯಿಂದ ಸ್ವಲ್ಪ ಜೇನನ್ನು ತಿಂದೆನು. ನಾನು
ಅದಕ್ಕಾಗಿ ಸಾಯಬೇಕೇ?’’ ಎಂದು ಕೇಳಿದನು.
44ಸೌಲನು, ‘‘ನಾನು ನನ್ನ ಆಣೆಯನ್ನು ನೆರವೇರಿಸ
ದಿದ್ದರೆ ಯೆಹೋವನು ಬಹುಶಃ ನನಗೆ ಬಹಳ ಕೆಟ್ಟದ್ದನ್ನು
ಮಾಡಬಹುದು. ಯೋನಾತಾನನು ಸಾಯಲೇಬೇಕು’’
ಎಂದು ಹೇಳಿದನು.
45ಆದರೆ ಸೈನಿಕರು ಸೌಲನಿಗೆ, ‘‘ಈ ದಿನ ಯೋನಾ
ತಾನನು ಇಸ್ರೇಲರನ್ನು ಮುನ್ನಡೆಸಿ ಮಹಾವಿಜಯವನ್ನು
ಉಂಟುಮಾಡಿದ್ದಾನೆ. ಯೋನಾತಾನನು ಸಾಯಲೇ
ಬೇಕೇ? ಇಲ್ಲ! ಜೀವಸ್ವರೂಪನಾದ ಯೆಹೋವನಾಣೆ,
ಯೋನಾತಾನನ ತಲೆಗೂದಲಲ್ಲಿ ಒಂದಾದರೂ ನೆಲಕ್ಕೆ
ಬೀಳಲು ನಾವು ಬಿಡುವುದಿಲ್ಲ. ಇಂದು ಫಿಲಿಷ್ಟಿಯರ
ವಿರುದ್ಧ ಹೋರಾಡಲು ದೇವರು ಯೋನಾತಾನನಿಗೆ
ಸಹಾಯಮಾಡಿದ್ದಾನೆ’’ ಎಂದು ಹೇಳಿದರು. ಹೀಗೆ
ಜನರು ಯೋನಾತಾನನನ್ನು ರಕ್ಷಿಸಿದರು. ಅವನನ್ನು
ಸಾಯಿಸಲಿಲ್ಲ.
46ಸೌಲನು ಫಿಲಿಷ್ಟಿಯರನ್ನು ಅಟ್ಟಿಸಿಕೊಂಡು ಹೋಗ
ಲಿಲ್ಲ. ಫಿಲಿಷ್ಟಿಯರು ತಮ್ಮ ಸ್ವಸ್ಥಳಕ್ಕೆ ಹಿಂದಿರುಗಿದರು.

### ಸೌಲನು ಇಸ್ರೇಲರ ಶತ್ರುಗಳೊಡನೆ ಹೋರಾಡುವನು

47ಸೌಲನು ಇಸ್ರೇಲನ್ನು ಪೂರ್ಣವಾಗಿ ಹತೋಟಿ
ಯಲ್ಲಿಟ್ಟುಕೊಂಡು ತಾನು ರಾಜನೆಂಬುದನ್ನು ತೋರಿಸಿ
ಕೊಟ್ಟನು. ಸೌಲನು ಇಸ್ರೇಲಿನ ಸುತ್ತಲೂ ವಾಸಿಸುತ್ತಿದ್ದ
ಶತ್ರುಗಳೊಡನೆ ಅಂದರೆ ಮೋವಾಬ್ಯರೊಡನೆ,
ಅಮ್ಮೋನಿಯರೊಡನೆ, ಎದೋಮ್ಯರೊಡನೆ, ಚೋಬದ
ಅರಸರೊಡನೆ ಮತ್ತು ಫಿಲಿಷ್ಟಿಯರೊಡನೆ ಹೋರಾಡಿ
ದನು. ಸೌಲನು ತಾನು ಹೋದಕಡೆಯಲ್ಲೆಲ್ಲ ಇಸ್ರೇಲರ
ಶತ್ರುಗಳನ್ನು ಸೋಲಿಸಿದನು. 48ಸೌಲನು ಬಹಳ ಧೈರ್ಯ
ಶಾಲಿ. ಅವನು ಅಮಾಲೇಕ್ಯರನ್ನೂ ಸೋಲಿಸಿದನು.
ಇಸ್ರೇಲರನ್ನು ಕೊಳ್ಳೆ ಹೊಡೆಯಬೇಕೆಂದಿದ್ದ ಶತ್ರು
ಗಳಿಂದ ಸೌಲನು ಇಸ್ರೇಲರನ್ನು ರಕ್ಷಿಸಿದನು.
49ಸೌಲನ ಗಂಡುಮಕ್ಕಳು ಯಾರೆಂದರೆ: ಯೋನಾ
ತಾನ್, ಇಷ್ವಿ ಮತ್ತು ಮಲ್ಕೀಷೂವ. ಸೌಲನ ಹಿರಿಯ
ಮಗಳ ಹೆಸರು ಮೇರಬ್. ಸೌಲನ ಕಿರಿಯ ಮಗಳ
ಹೆಸರು ಮೀಕಲ್. 50ಸೌಲನ ಹೆಂಡತಿಯ ಹೆಸರು
ಅಹೀನೋವಮ್. ಅಹೀನೋವಮಳ ತಂದೆ ಅಹೀ
ಮಾಚ.

ನೇರನ ಮಗನಾದ ಅಬ್ನೇರನು ಸೌಲನ ಸೈನ್ಯದ
ಸೇನಾಪತಿ. ನೇರನು ಸೌಲನ ಚಿಕ್ಕಪ್ಪ. 51ಸೌಲನ ತಂದೆ
ಯಾದ ಕೀಷನೂ ಅಬ್ನೇರನ ತಂದೆಯಾದ ನೇರನೂ
ಅಬೀಯೇಲನ ಮಕ್ಕಳು.
52ಸೌಲನು ತನ್ನ ಜೀವಮಾನವೆಲ್ಲ ಶೌರ್ಯದಿಂದ
ಫಿಲಿಷ್ಟಿಯರ ವಿರುದ್ಧ ತೀವ್ರವಾಗಿ ಹೋರಾಡಿದನು.
ಸೌಲನು ವೀರನನ್ನಾಗಲೀ ಧೈರ್ಯಶಾಲಿಯನ್ನಾಗಲೀ
ಯಾವಾಗಲಾದರೂ ನೋಡಿದರೆ, ಅಂತಹವರನ್ನು
ಸೈನ್ಯಕ್ಕೆ ತೆಗೆದುಕೊಂಡು, ಅವರನ್ನು ರಾಜನ ಅಂಗರಕ್ಷಕ
ಪಡೆಗೆ ಸೇರಿಸಿಕೊಳ್ಳುತ್ತಿದ್ದನು.

### ಸೌಲನಿಂದ ಅಮಾಲೇಕ್ಯರ ನಾಶನ

15 ಒಂದು ದಿನ ಸಮುವೇಲನು ಸೌಲನಿಗೆ,
‘‘ಯೆಹೋವನು ಇಸ್ರೇಲರ ಮೇಲೆ ನಿನ್ನನ್ನು
ರಾಜನನ್ನಾಗಿ ನೇಮಿಸಲು ನನ್ನನ್ನು ಕಳುಹಿಸಿದನು. ಈಗ
ಯೆಹೋವನ ಸಂದೇಶವನ್ನು ಕೇಳು. 2 ಸರ್ವಶಕ್ತನಾದ
ಯೆಹೋವನು ಇಂತೆನ್ನುತ್ತಾನೆ: ‘ಇಸ್ರೇಲರು ಈಜಿಪ್ಟಿ
ನಿಂದ ಹೊರಬಂದಾಗ ಅಮಾಲೇಕ್ಯರು ಅವರನ್ನು
ಕಾನಾನಿಗೆ ಹೋಗದಂತೆ ತಡೆಯಲು ಪ್ರಯತ್ನಿಸಿದರು.
ಅಮಾಲೇಕ್ಯರು ಮಾಡಿದ್ದನ್ನು ನಾನು ನೋಡಿದೆ. 3ಈಗ,
ನೀನು ಹೋಗಿ ಅಮಾಲೇಕ್ಯರ ವಿರುದ್ಧ ಹೋರಾಡು.
ನೀನು ಅಮಾಲೇಕ್ಯರನ್ನೂ ಮತ್ತು ಅವರಿಗೆ ಸೇರಿದ
ಎಲ್ಲವನ್ನೂ ನಾಶಗೊಳಿಸಬೇಕು. ಯಾರನ್ನೂ ಜೀವ
ದಿಂದ ಉಳಿಸಬೇಡ, ನೀನು ಎಲ್ಲ ಗಂಡಸರನ್ನು ಮತ್ತು
ಹೆಂಗಸರನ್ನು ಕೊಲ್ಲಬೇಕು. ನೀನು ಎಲ್ಲ ಮಕ್ಕಳನ್ನೂ
ಎಳೆಕೂಸುಗಳನ್ನೂ ಕೊಲ್ಲಬೇಕು. ನೀನು ಅವರಿಗೆ
ಸೇರಿದ ಎಲ್ಲ ಹಸುಗಳನ್ನೂ ಕುರಿಗಳನ್ನೂ ಒಂಟೆಗಳನ್ನೂ
ಕತ್ತೆಗಳನ್ನೂ ಕೊಂದುಹಾಕಬೇಕು’’ ಎಂದು ಹೇಳಿದನು.
4ಸೌಲನು ತೆಲಾಯೀಮಿನಲ್ಲಿ ಸೈನ್ಯವನ್ನೆಲ್ಲ ಒಟ್ಟು
ಗೂಡಿಸಿದನು. ಅಲ್ಲಿ ಎರಡು ಲಕ್ಷ ಮಂದಿ ಭೂಸೈನಿಕ
ರಿದ್ದರು ಮತ್ತು ಇತರ ಹತ್ತು ಸಾವಿರ ಮಂದಿ ಜನರಿದ್ದರು.
ಯೆಹೂದ್ಯರೂ ಅವರೊಂದಿಗೆ ಸೇರಿಕೊಂಡಿದ್ದರು.

[5]ಸೌಲನು ಅಮಾಲೇಕ್ಯರ ನಗರಕ್ಕೆ ಹೋಗಿ ಅಲ್ಲಿನ ಕಣಿವೆಯಲ್ಲಿ ಹೊಂಚುಹಾಕುತ್ತಿದ್ದನು. [6]ಸೌಲನು ಕೇನ್ಯದ ಜನರಿಗೆ, ''ಅಮಾಲೇಕ್ಯರನ್ನು ತ್ಯಜಿಸಿ ಹೊರಗೆ ಹೋಗಿ. ಆಗ ನಿಮ್ಮನ್ನು ಅಮಾಲೇಕ್ಯರೊಂದಿಗೆ ನಾಶ ಗೊಳಿಸುವುದಿಲ್ಲ. ಇಸ್ರೇಲರು ಈಜಿಪ್ಟಿನಿಂದ ಹೊರ ಬಂದಾಗ ನೀವು ಅವರಿಗೆ ಅನುಕಂಪ ತೋರಿದ್ದೀರಿ'' ಎಂದು ಹೇಳಿದನು. ಆದ್ದರಿಂದ ಕೇನ್ಯರು ಅಮಾಲೇಕ್ಯ ರನ್ನು ಬಿಟ್ಟುಹೋದರು.

[7]ಸೌಲನು ಅಮಾಲೇಕ್ಯರನ್ನು ಸೋಲಿಸಿದನು. ಅವನು ಹವೀಲಾದಿಂದ ಈಜಿಪ್ಟಿನ ಗಡಿಯಲ್ಲಿರುವ ಶೂರಿನ ವರೆಗೂ ಅವರೊಡನೆ ಹೋರಾಡಿದನು. [8]ಸೌಲನು ಅಮಾಲೇಕ್ಯರ ರಾಜನಾದ ಅಗಾಗನನ್ನು ಜೀವಸಹಿತ ಉಳಿಸಿದನು. ಆದರೆ ಉಳಿದ ಅಮಾಲೇಕ್ಯರನ್ನೆಲ್ಲ ಕೊಂದುಹಾಕಿದನು. [9]ಹೀಗೆ ಸೌಲನು ಮತ್ತು ಇಸ್ರೇಲ್ ಸೈನಿಕರು ಅಗಾಗನಿಗೆ ಜೀವದಾನ ಮಾಡಿದರು. ಅವರು ಉತ್ತಮ ಕುರಿಗಳನ್ನೂ ದನಗಳನ್ನೂ ಆಡಿನ ಮರಿಗಳನ್ನೂ ಉಳಿಸಿದರು. ಅವರು ಉಪಯುಕ್ತವಾದುದನ್ನು ಉಳಿಸಿ, ಅನುಪಯುಕ್ತವಾದುದನ್ನು ನಾಶಗೊಳಿಸಿದರು.

### ಸಮುವೇಲನು ಸೌಲನಿಗೆ ಅವನ ಪಾಪದ ಬಗ್ಗೆ ತಿಳಿಸುವನು

[10]ಸಮುವೇಲನಿಗೆ ಯೆಹೋವನ ಸಂದೇಶ ಬಂದಿತು. [11]ಯೆಹೋವನು ಸಮುವೇಲನಿಗೆ, ''ಸೌಲನು ನನ್ನ ಮಾರ್ಗವನ್ನು ತ್ಯಜಿಸಿದನು. ನಾನು ಸೌಲನನ್ನು ರಾಜ ನನ್ನಾಗಿ ಮಾಡಿದ್ದಕ್ಕಾಗಿ ಪಶ್ಚಾತ್ತಾಪಪಡುತ್ತೇನೆ. ನಾನು ಆಜ್ಞಾಪಿಸಿದ ಕಾರ್ಯಗಳನ್ನು ಅವನು ಮಾಡುತ್ತಿಲ್ಲ'' ಎಂದು ಹೇಳಿದನು. ಸಮುವೇಲನು ತಳಮಳಗೊಂಡನು. ಅವನು ರಾತ್ರಿಯೆಲ್ಲ ಅಳುತ್ತಾ ಯೆಹೋವನಲ್ಲಿ ಮೊರೆ ಯಿಟ್ಟನು.

[12]ಸಮುವೇಲನು ಮಾರನೆಯ ದಿನ ಬೆಳಿಗ್ಗೆ ಮೇಲೆದ್ದು, ಸೌಲನನ್ನು ಭೇಟಿಮಾಡಲು ಹೋದನು. ಆದರೆ ಜನ ರೆಲ್ಲ ಸಮುವೇಲನಿಗೆ, ''ಸೌಲನು ತನ್ನ ಗೌರವಾರ್ಥವಾಗಿ ಜ್ಞಾಪಕಸ್ತಂಭವನ್ನು ನಿರ್ಮಿಸಲು ಕರ್ಮೆಲ್ ಎಂಬ ಪಟ್ಟಣಕ್ಕೆ ಹೋದನು. ನಂತರ ಸೌಲನು ಕೆಲವು ಪ್ರದೇಶ ಗಳನ್ನು ಸುತ್ತಿಕೊಂಡು ಗಿಲ್ಗಾಲಿಗೆ ಹೋದನು''ಎಂದು ಹೇಳಿದರು.

ಸಮುವೇಲನು ಸೌಲನಿದ್ದ ಸ್ಥಳಕ್ಕೆ ಹೋದನು. ಸೌಲನು ಅಮಾಲೇಕ್ಯರಿಂದ ವಶಪಡಿಸಿಕೊಂಡ ಪಶು ಗಳನ್ನು ಪ್ರಥಮ ಸರ್ವಾಂಗಹೋಮವಾಗಿ ಯೆಹೋವ ನಿಗೆ ಅರ್ಪಿಸುತ್ತಿದ್ದನು. [13]ಸೌಲನು ಸಮುವೇಲನ ಹತ್ತಿರಕ್ಕೆ ಹೋಗಿ, ''ಯೆಹೋವನು ನಿನ್ನನ್ನು ಆಶೀರ್ವದಿಸಲಿ; ನಾನು ಯೆಹೋವನ ಆಜ್ಞೆಗಳನ್ನು ಪಾಲಿಸಿದ್ದೇನೆ'' ಎಂದು ಹೇಳಿದನು.

[14]ಅದಕ್ಕೆ ಸಮುವೇಲನು, ''ಹಾಗಿದ್ದರೆ ನಾನು ಕೇಳು ತ್ತಿರುವ ಶಬ್ದವೇನು? ದನಕುರಿಗಳ ಶಬ್ದವು ಕೇಳುತ್ತಿದೆ ಯಲ್ಲಾ!'' ಎಂದನು.

[15]ಸೌಲನು, ''ಸೈನಿಕರು ಅಮಾಲೇಕ್ಯರಿಂದ ವಶಪಡಿಸಿ ಕೊಂಡ ಪಶುಗಳಲ್ಲಿ ಉತ್ತಮವಾದುದ್ದನ್ನು ನಿನ್ನ ದೇವ ರಾದ ಯೆಹೋವನಿಗೆ ಅರ್ಪಿಸುವುದಕ್ಕಾಗಿ ತೆಗೆದು ಕೊಂಡು ಬಂದಿದ್ದಾರೆ. ಆದರೆ ನಾವು ಉಳಿದೆಲ್ಲವನ್ನು ನಾಶಪಡಿಸಿದೆವು''ಎಂದು ಉತ್ತರಿಸಿದನು.

[16]ಸಮುವೇಲನು ಸೌಲನಿಗೆ, ''ಯೆಹೋವನು ಕಳೆದ ರಾತ್ರಿ ನನಗೆ ಹೇಳಿದ್ದನ್ನು ನಿನಗೆ ತಿಳಿಸುತ್ತೇನೆ'' ಎಂದನು. ಸೌಲನು. ''ಸರಿ, ತಿಳಿಸು'' ಎಂದು ಉತ್ತರಿಸಿದನು.

[17]ಸಮುವೇಲನು, ''ನೀನು ಮೊದಲು ನಿನ್ನನ್ನು ಅಲ್ಪ ನೆಂದು ತಿಳಿದಿದ್ದೆ. ಯೆಹೋವನು ನಿನ್ನನ್ನು ಇಸ್ರೇಲರಿಗೆ ರಾಜನನ್ನಾಗಿ ಆರಿಸಿಕೊಂಡದ್ದರಿಂದ ಇಸ್ರೇಲ್ ಕುಲ ಗಳಿಗೆ ನಾಯಕನಾದೆ. [18]ಯೆಹೋವನು ನಿನಗೆ, 'ಹೋಗು ದುಷ್ಟರಾದ ಅಮಾಲೇಕ್ಯರೆಲ್ಲರನ್ನೂ ನಾಶಗೊಳಿಸು. ಅವ ರನ್ನು ಸಂಪೂರ್ಣವಾಗಿ ನಾಶಗೊಳಿಸು' ಎಂದು ಆಜ್ಞಾಪಿಸಿದರು. [19]ಆದರೆ ನೀನು ಯೆಹೋವನ ಮಾತು ಗಳಿಗೆ ಕಿವಿಗೊಡಲಿಲ್ಲ. ನೀನು ಅವುಗಳನ್ನು ನಿನ್ನ ಬಳಿಯ ಲ್ಲಿಟ್ಟುಕೊಳ್ಳಲು ಬಯಸಿದೆ. ಹೀಗೆ ಯೆಹೋವನು ಕೆಟ್ಟ ದೆಂದು ಹೇಳಿದ್ದನ್ನೇ ನೀನು ಮಾಡಿದೆ!'' ಎಂದು ಹೇಳಿದನು. [20]ಸೌಲನು, ''ಆದರೆ ನಾನು ಯೆಹೋವನಿಗೆ ವಿಧೇಯನಾದೆ. ಯೆಹೋವನು ಕಳುಹಿಸಿದಲ್ಲಿಗೆ ನಾನು ಹೋದೆ. ನಾನು ಅಮಾಲೇಕ್ಯರೆಲ್ಲರನ್ನು ನಾಶಗೊಳಿಸಿದೆ. ಆದರೆ ಒಬ್ಬನನ್ನೇ ನಾನು ತಂದೆನು. ಅವನೇ ರಾಜನಾದ ಅಗಾಗ. [21]ನಿನ್ನ ದೇವರಾದ ಯೆಹೋವನಿಗೆ ಗಿಲ್ಗಾಲಿನಲ್ಲಿ ಯಜ್ಞ ಅರ್ಪಿಸುವುದಕ್ಕಾಗಿ ಸೈನಿಕರು ಉತ್ತಮವಾದ ದನ ಕುರಿಗಳನ್ನು ವಶಪಡಿಸಿಕೊಂಡು ಬಂದರು'' ಎಂದು ಉತ್ತರಿಸಿದನು.

[22]ಆದರೆ ಸಮುವೇಲನು, ''ಯೆಹೋವನಿಗೆ ಯಾವುದು ಹೆಚ್ಚು ಮೆಚ್ಚಿಗೆಯಾಗಿದೆ? ಸರ್ವಾಂಗ ಹೋಮಗಳೇ? ಯಜ್ಞಗಳೇ? ಇಲ್ಲವೆ ಯೆಹೋವನ ಆಜ್ಞೆಗಳಿಗೆ ವಿಧೇಯರಾಗುವುದೇ? ದೇವರಿಗೆ ಯಜ್ಞ ವನ್ನು ಸಮರ್ಪಿಸುವುದಕ್ಕಿಂತ ಆತನ ಆಜ್ಞೆಗಳಿಗೆ ವಿಧೇಯ ರಾಗಿರುವುದೇ ಉತ್ತಮ. ಟಗರುಗಳ ಕೊಬ್ಬನ್ನು ಅರ್ಪಿಸುವುದಕ್ಕಿಂತ ಆತನ ಮಾತುಗಳನ್ನು ಆಲಿಸುವುದು ಉತ್ತಮ. [23]ಅವಿಧೇಯತೆಯು ಮಾಟಮಂತ್ರಗಳಷ್ಟೇ ಪಾಪಪೂರಿತವಾದುದು. ಮೊಂಡುತನದಿಂದ ತನ್ನ ಇಷ್ಟ ದಂತೆ ಮಾಡುವುದು ವಿಗ್ರಹಾರಾಧನೆಯಷ್ಟೇ ಪಾಪ ಪೂರಿತವಾದುದು. ನೀನು ಯೆಹೋವನ ಆಜ್ಞೆಗಳಿಗೆ ವಿಧೇಯನಾಗಲಿಲ್ಲ. ಈ ಕಾರಣದಿಂದ ಈಗ ಯೆಹೋವನು ನಿನ್ನನ್ನು ರಾಜನನ್ನಾಗಿ ಸ್ವೀಕರಿಸಿಕೊಳ್ಳು ವುದಿಲ್ಲ'' ಎಂದು ಸೌಲನಿಗೆ ಉತ್ತರಿಸಿದನು.

24ಆಗ ಸೌಲನು ಸಮುವೇಲನಿಗೆ, ‘‘ನಾನು
ಪಾಪಮಾಡಿದ್ದೇನೆ. ನಾನು ಯೆಹೋವನ ಆಜ್ಞೆಗಳಿಗೆ
ವಿಧೇಯನಾಗಲಿಲ್ಲ; ನೀನು ಹೇಳಿದ್ದನ್ನು ನಾನು ಮಾಡ
ಲಿಲ್ಲ. ನಾನು ಜನರಿಗೆ ಹೆದರಿ ಅವರು ಹೇಳಿದಂತೆ
ಮಾಡಿದೆ. 25ಈಗ ನಾನು ನಿನ್ನಲ್ಲಿ ಬೇಡಿಕೊಳ್ಳುತ್ತೇನೆ, ನನ್ನ
ಪಾಪವನ್ನು ಕ್ಷಮಿಸು. ನನ್ನೊಂದಿಗೆ ಹಿಂದಿರುಗಿ ಬಾ, ಆಗ
ನಾನು ಯೆಹೋವನನ್ನು ಆರಾಧಿಸಲು ಸಾಧ್ಯ
ವಾಗುವುದು’’ ಎಂದು ಹೇಳಿದನು.

26ಆದರೆ ಸಮುವೇಲನು ಸೌಲನಿಗೆ, ‘‘ನಾನು
ಹಿಂದಿರುಗಿ ನಿನ್ನ ಜೊತೆಯಲ್ಲಿ ಬರುವುದಿಲ್ಲ. ನೀನು
ಯೆಹೋವನ ಆಜ್ಞೆಯನ್ನು ನಿರಾಕರಿಸಿರುವೆ. ಈಗ
ಯೆಹೋವನೂ ನಿನ್ನನ್ನು ಇಸ್ರೇಲಿನ ರಾಜತ್ವದಿಂದ
ನಿರಾಕರಿಸುತ್ತಾನೆ’’ ಎಂದು ಹೇಳಿದನು.

27ಸಮುವೇಲನು ಹೋಗಲು ತಿರುಗಿದಾಗ ಸೌಲನು
ಸಮುವೇಲನ ಮೇಲಂಗಿಯ ಅಂಚನ್ನು ಹಿಡಿದು
ಎಳೆದನು. ಮೇಲಂಗಿಯು ಹರಿದು ಹೋಯಿತು.
28ಸಮುವೇಲನು ಸೌಲನಿಗೆ, ‘‘ನೀನು ನನ್ನ ಮೇಲಂಗಿ
ಯನ್ನು ಹರಿದುಹಾಕಿದೆ. ಇದೇ ರೀತಿ ಯೆಹೋವನು ಈ
ದಿನ ನಿನ್ನಿಂದ ಇಸ್ರೇಲ್ ರಾಜ್ಯವನ್ನು ಹರಿದುಹಾಕಿದನು.
ನಿನ್ನ ಸ್ನೇಹಿತರಲ್ಲಿ ಒಬ್ಬನಿಗೆ ಯೆಹೋವನು ರಾಜ್ಯಾಧಿ
ಕಾರವನ್ನು ಕೊಟ್ಟಿದ್ದಾನೆ. ಅವನು ನಿನಗಿಂತ ಉತ್ತಮ
ವ್ಯಕ್ತಿ. 29ಯೆಹೋವನು ಇಸ್ರೇಲಿನ ದೇವರಾಗಿದ್ದಾನೆ.
ಯೆಹೋವನು ಸರ್ವಕಾಲದಲ್ಲೂ ಇರುವನು.
ಯೆಹೋವನು ಸುಳ್ಳಾಡುವುದಿಲ್ಲ. ಹಾಗೂ ಮನಸ್ಸನ್ನು
ಬದಲಾಯಿಸುವುದಿಲ್ಲ. ಯೆಹೋವನು ಮನುಷ್ಯನಂತೆ
ಪದೇಪದೇ ಮನಸ್ಸನ್ನು ಬದಲಾಯಿಸುವವನಲ್ಲ’’ ಎಂದು
ಹೇಳಿದನು.

30ಸೌಲನು, ‘‘ನಾನು ಪಾಪಮಾಡಿದ್ದೇನೆಂಬುದು ಸರಿ.
ಆದರೆ ದಯವಿಟ್ಟು ನನ್ನ ಜೊತೆಯಲ್ಲಿ ಹಿಂದಿರುಗಿ ಬಾ.
ಇಸ್ರೇಲಿನ ಜನರೆದುರು ಮತ್ತು ನಾಯಕರೆದುರು ಸ್ವಲ್ಪ
ಗೌರವವನ್ನು ತೋರಿಸು. ನನ್ನ ಜೊತೆಯಲ್ಲಿ ನೀನು
ಹಿಂದಿರುಗಿ ಬಂದರೆ, ನಾನು ನಿನ್ನ ದೇವರಾದ ಯೆಹೋವ
ನನ್ನು ಆರಾಧಿಸಬಹುದು’’ ಎಂದು ಕೇಳಿಕೊಂಡನು.
31ಸಮುವೇಲನು ಸೌಲನ ಜೊತೆಯಲ್ಲಿ ಹೋದನು.
ಸೌಲನು ಯೆಹೋವನನ್ನು ಆರಾಧಿಸಿದನು.

32ಸಮುವೇಲನು, ‘‘ಅಮಾಲೇಕ್ಯರ ರಾಜನಾದ
ಅಗಾಗನನ್ನು ನನ್ನ ಬಳಿಗೆ ಕರೆದುಕೊಂಡು ಬಾ’’ ಎಂದು
ಹೇಳಿದನು. ಅಗಾಗನು ಸಮುವೇಲನ ಹತ್ತಿರಕ್ಕೆ ಬಂದನು.
ಅಗಾಗನನ್ನು ಸರಪಣಿಗಳಿಂದ ಬಂಧಿಸಲಾಗಿತ್ತು. ಅಗಾ
ಗನು, ‘‘ಅವನು ನನ್ನನ್ನು ನಿಜವಾಗಿಯೂ ಕೊಲ್ಲುವು
ದಿಲ್ಲ’’ ಎಂದು ಆಲೋಚಿಸಿದನು.

33ಆದರೆ ಸಮುವೇಲನು ಅಗಾಗನಿಗೆ, ‘‘ನಿನ್ನ ಕತ್ತಿಯು
ಅನೇಕ ತಾಯಂದಿರಿಗೆ ಮಕ್ಕಳಿಲ್ಲದಂತೆ ಮಾಡಿದೆ. ಆದುದ
ರಿಂದ ಈಗ ನಿನ್ನ ತಾಯಿಗೆ ಮಕ್ಕಳಿಲ್ಲದಂತಾಯಿತು’’
ಎಂದು ಹೇಳಿ ಅಗಾಗನನ್ನು ಗಿಲ್ಗಾಲಿನ ಯೆಹೋವನ
ಸನ್ನಿಧಿಯಲ್ಲಿಯೇ ಕಡಿದುಹಾಕಿದನು.

34ನಂತರ ಸಮುವೇಲನು ಅಲ್ಲಿಂದ ಹೊರಟು ರಾಮಕ್ಕೆ
ಹೋದನು. ಸೌಲನು ಗಿಬೆಯದ ತನ್ನ ಮನೆಗೆ
ಹೋದನು. 35ಅನಂತರ ಸಮುವೇಲನು ತನ್ನ ಜೀವಿತದ
ಅವಧಿಯಲ್ಲಿ ಸೌಲನನ್ನು ನೋಡಲಿಲ್ಲ. ಸಮುವೇಲನು
ಸೌಲನಿಗಾಗಿ ಬಹಳ ದುಃಖಪಟ್ಟನು. ಸೌಲನನ್ನು
ಇಸ್ರೇಲರ ರಾಜನನ್ನಾಗಿ ಮಾಡಿದ್ದಕ್ಕೆ ಯೆಹೋವನು
ಬಹಳ ಸಂತಾಪಪಟ್ಟನು.

## ಸಮುವೇಲನು ಬೇತ್ಲೆಹೇಮಿಗೆ ಹೋಗುವನು

16 ಯೆಹೋವನು ಸಮುವೇಲನಿಗೆ, ‘‘ನೀನು
ಸೌಲನಿಗಾಗಿ ಎಷ್ಟುಕಾಲ ಶೋಕಿಸುವೆ? ನಾನು
ಸೌಲನನ್ನು ಇಸ್ರೇಲರ ರಾಜತ್ವದಿಂದ ತಿರಸ್ಕರಿಸಿರುತ್ತೇನೆ.
ನೀನು ಕೊಂಬಿನಲ್ಲಿ ಎಣ್ಣೆಯನ್ನು ತುಂಬಿಕೊಂಡು ಬಾ.
ನಾನು ನಿನ್ನನ್ನು ಇಷಯನೆಂಬ ಮನುಷ್ಯನ ಬಳಿಗೆ
ಕಳುಹಿಸುತ್ತೇನೆ. ಇಷಯನು ಬೇತ್ಲೆಹೇಮಿನಲ್ಲಿ ವಾಸಿಸು
ತ್ತಿದನು. ನಾನು ಅವನ ಮಕ್ಕಳಲ್ಲಿ ಒಬ್ಬನನ್ನು ಹೊಸ
ರಾಜನನ್ನಾಗಿ ಆರಿಸಿದ್ದೇನೆ’’ ಎಂದು ಹೇಳಿದನು.

2ಆದರೆ ಸಮುವೇಲನು, ‘‘ನಾನು ಹೊರಟರೆ ಸೌಲನಿಗೆ
ಈ ಸುದ್ದಿಯು ತಿಳಿಯುತ್ತದೆ. ಆಗ ಅವನು ನನ್ನನ್ನು
ಕೊಲ್ಲಲು ಪ್ರಯತ್ನಿಸುತ್ತಾನೆ’’ ಎಂದನು.

ಯೆಹೋವನು, ‘‘ಬೇತ್ಲೆಹೇಮಿಗೆ ಹೋಗು.
ನಿನ್ನೊಡನೆ ಒಂದು ಎಳೆಕರುವನ್ನು ತೆಗೆದುಕೊಂಡು
ಹೋಗು. ‘ನಾನು ಯೆಹೋವನಿಗೆ ಯಜ್ಞವನ್ನರ್ಪಿಸಲು
ಬಂದಿದ್ದೇನೆ’ ಎಂದು ಹೇಳು. 3ಯಜ್ಞಕಾರ್ಯಕ್ಕೆ ಇಷಯ
ನನ್ನು ಆಹ್ವಾನಿಸು. ಆಗ ನೀನು ಮಾಡಬೇಕಾದುದನ್ನು
ತೋರಿಸುತ್ತೇನೆ. ನಾನು ತೋರಿಸಿದ ಮನುಷ್ಯನಿಗೆ ನೀನು
ಅಭಿಷೇಕವನ್ನು ಮಾಡಬೇಕು’’ ಎಂದು ಹೇಳಿದನು.

4ಸಮುವೇಲನು ತನಗೆ ಯೆಹೋವನು ಹೇಳಿದಂತೆ
ಮಾಡಿದನು. ಸಮುವೇಲನು ಬೇತ್ಲೆಹೇಮಿಗೆ ಹೋದನು.
ಬೇತ್ಲೆಹೇಮಿನ ಹಿರಿಯರು ಭಯದಿಂದ ನಡುಗಿದರು.
ಅವರು ಸಮುವೇಲನನ್ನು ಕಂಡು, ‘‘ನಿನ್ನ ಆಗಮನವು
ಸಮಾಧಾನಕರವೇ?’’ ಎಂದು ಕೇಳಿದರು.

5ಸಮುವೇಲನು, ‘‘ಹೌದು, ಸಮಾಧಾನಕರವಾಗಿದೆ.
ನಾನು ಯೆಹೋವನಿಗೆ ಯಜ್ಞವನ್ನು ಅರ್ಪಿಸಲು ಬಂದಿ
ದ್ದೇನೆ. ನೀವೆಲ್ಲ ಸಿದ್ಧರಾಗಿ ಯಜ್ಞಕಾರ್ಯಕ್ಕಾಗಿ
ನನ್ನೊಂದಿಗೆ ಬನ್ನಿ’’ ಎಂದು ಹೇಳಿದನು. ಸಮುವೇಲನು
ಇಷಯನನ್ನು ಮತ್ತು ಅವನ ಮಕ್ಕಳನ್ನು ಸಿದ್ಧಗೊಳಿಸಿ
ದನು. ನಂತರ ಸಮುವೇಲನು ಅವರನ್ನು ಯಜ್ಞದಲ್ಲಿ
ಭಾಗಿಗಳಾಗಲು ಆಹ್ವಾನಿಸಿದನು.’’ 6ಇಷಯನು ಮತ್ತು
ಅವನ ಮಕ್ಕಳು ಬಂದಾಗ, ಸಮುವೇಲನು

ಎಲೀಯಾಬನನ್ನು ನೋಡಿದನು. ಸಮುವೇಲನು
ತನ್ನಲ್ಲೇ ಯೋಚಿಸುತ್ತಾ, ‘‘ಯೆಹೋವನು ಆಯ್ಕೆ
ಮಾಡಿರುವವನು ನಿಜವಾಗಿಯೂ ಅವನೇ ಇರಬೇಕು’’
ಎಂದುಕೊಂಡನು.

7ಆದರೆ ಯೆಹೋವನು ಸಮುವೇಲನಿಗೆ ‘‘ಎಲೀಯಾ
ಬನು ಎತ್ತರವನ್ನಾಗಲೀ ರೂಪವನ್ನಾಗಲೀ ಪರಿಗಣಿಸ
ಬೇಡ. ಯಾಕಂದರೆ ನಾನು ಅವನನ್ನು ತಿರಸ್ಕರಿಸಿದ್ದೇನೆ.
ಮನುಷ್ಯರಾದರೊ ಹೊರತೋರಿಕೆಯನ್ನು ಪರಿಗಣಿಸು
ತ್ತಾರೆ; ಯೆಹೋವನಾದರೊ ಹೊರ ತೋರಿಕೆಯನ್ನು
ನೋಡದೆ ಹೃದಯವನ್ನೇ ನೋಡುವವನಾಗಿದ್ದಾನೆ’’
ಎಂದು ಹೇಳಿದನು.

8ನಂತರ ಇಷಯನು ಎರಡನೆಯ ಮಗನಾದ
ಅಬೀನಾದಾಬನನ್ನು ಕರೆದನು. ಅಬೀನಾದಾಬನು
ಸಮುವೇಲನ ಹತ್ತಿರಕ್ಕೆ ಬಂದನು. ಸಮುವೇಲನು,
‘‘ಯೆಹೋವನು ಆರಿಸಿಕೊಂಡಿರುವ ವ್ಯಕ್ತಿ ಇವನಲ್ಲ’’
ಎಂದು ಹೇಳಿದನು.

9ಅನಂತರ ಇಷಯನು ಶಮ್ಮನನ್ನು ಸಮುವೇಲನ
ಬಳಿಗೆ ಕಳುಹಿಸಿದನು. ಆದರೆ ಸಮುವೇಲನು,
‘‘ಯೆಹೋವನು ಇವನನ್ನೂ ಆರಿಸಲಿಲ್ಲ’’ ಎಂದನು.
10ಇಷಯನು ತನ್ನ ಏಳು ಜನ ಮಕ್ಕಳನ್ನು ಸಮುವೇಲ
ನಿಗೆ ತೋರಿಸಿದನು. ಆದರೆ ಸಮುವೇಲನು,
‘‘ಯೆಹೋವನು ಇವರಲ್ಲಿ ಯಾರೊಬ್ಬನನ್ನೂ ಆರಿಸಿ
ಕೊಳ್ಳಲಿಲ್ಲ’’ ಎಂದನು.
11ನಂತರ ಸಮುವೇಲನು ಇಷಯನನ್ನು, ‘‘ನಿನಗೆ
ಇರುವ ಮಕ್ಕಳು ಇಷ್ಟೆಯೋ?’’ಎಂದು ಕೇಳಿದನು.

ಇಷಯನು, ‘‘ಇಲ್ಲ, ನನಗೆ ಇನ್ನೊಬ್ಬ ಕಿರಿಯ ಮಗ
ನಿದ್ದಾನೆ. ಅವನು ಕುರಿಕಾಯಲು ಹೋಗಿದ್ದಾನೆ’’ಎಂದು
ಹೇಳಿದನು.

ಸಮುವೇಲನು, ‘‘ಅವನನ್ನು ಕರೆಕಳುಹಿಸು. ಅವನನ್ನು
ಇಲ್ಲಿಗೆ ಬರ ಹೇಳು. ಅವನು ಬರುವತನಕ ನಾವು ಊಟಕ್ಕೆ
ಕುಳಿತುಕೊಳ್ಳುವುದು ಬೇಡ’’ ಎಂದು ಹೇಳಿದನು.

12ಇಷಯನು ಕಿರಿಯ ಮಗನನ್ನು ಕರೆತರಲು ಒಬ್ಬ
ನನ್ನು ಕಳುಹಿಸಿದನು. ಇವನಾದರೊ ಕೆಂಬಣ್ಣದವನೂ
ಸುಂದರನೇತ್ರನೂ ನೋಟಕ್ಕೆ ರಮಣೀಯನೂ ಆಗಿ
ದ್ದನು. ಯೆಹೋವನು ಸಮುವೇಲನಿಗೆ, ‘‘ಮೇಲೆದ್ದು
ನಿಲ್ಲು, ಅವನನ್ನು ಅಭಿಷೇಕಿಸು. ಇವನನ್ನೇ ನಾನು
ಆರಿಸಿದ್ದು’’ ಎಂದು ಹೇಳಿದನು.

13ಸಮುವೇಲನು ಎಣ್ಣೆಯಿದ್ದ ಕೊಂಬನ್ನು ತೆಗದು
ಕೊಂಡು, ಅದರಲ್ಲಿದ್ದ ವಿಶೇಷವಾದ ಎಣ್ಣೆಯನ್ನು
ಇಷಯನ ಕಿರಿಮಗನ ಮೇಲೆ, ಅವನ ಸೋದರರ
ಎದುರಿನಲ್ಲೇ ಸುರಿದನು. ಆ ದಿನದಿಂದ ಯೆಹೋವನ
ಆತ್ಮವು ಮಹಾಶಕ್ತಿಯೊಡನೆ ದಾವೀದನಲ್ಲಿ ನೆಲೆಸಿತು.

ಸಮುವೇಲನು ರಾಮಕ್ಕೆ ಹಿಂದಿರುಗಿದನು.

### ದುರಾತ್ಮವು ಸೌಲನನ್ನು ಪೀಡಿಸುವುದು

14ಯೆಹೋವನ ಆತ್ಮವು ಸೌಲನನ್ನು ಬಿಟ್ಟು
ಹೋಯಿತು. ನಂತರ ಯೆಹೋವನು ದುರಾತ್ಮ
ವೊಂದನ್ನು ಸೌಲನ ಬಳಿಗೆ ಕಳುಹಿಸಿದನು. ಅದು ಅವನಿಗೆ
ಬಹಳ ತೊಂದರೆ ಮಾಡಿತು. 15ಸೌಲನ ಸೇವಕರು
ಅವನಿಗೆ, ‘‘ಯೆಹೋವನು ಕಳುಹಿಸಿರುವ ದುರಾತ್ಮವು
ನಿನ್ನನ್ನು ಪೀಡಿಸುತ್ತಿದೆ. 16ನಮಗೆ ಆಜ್ಞಾಪಿಸುವುದಾದರೆ,
ಕಿನ್ನರಿ ಬಾರಿಸುವವನನ್ನು ಹುಡುಕಿ ಕರೆದುಕೊಂಡು
ಬರುತ್ತೇವೆ. ಯೆಹೋವನಿಂದ ಬಂದ ದುರಾತ್ಮವು ನಿನ್ನ
ಮೈಮೇಲೆ ಬಂದಾಗ ಅವನು ಕಿನ್ನರಿ ಬಾರಿಸಿದರೆ, ದುರಾ
ತ್ಮವು ನಿನ್ನನ್ನು ಬಿಟ್ಟುಹೋಗಿ ನಿನಗೆ ಉಪಶಮನ
ವಾಗುತ್ತದೆ’’ ಎಂದು ಹೇಳಿದರು.

17ಸೌಲನು ಅವನ ಸೇವಕರಿಗೆ, ‘‘ಕಿನ್ನರಿ ಬಾರಿಸು
ವವನನ್ನು ಹುಡುಕಿಕೊಂಡು ನನ್ನ ಬಳಿಗೆ ಕರೆತನ್ನಿ’’ ಎಂದು
ಹೇಳಿದನು.

18ಅವನ ಸೇವಕರಲ್ಲಿ ಒಬ್ಬನು, ‘‘ಇಷಯ ಎಂಬ
ಹೆಸರಿನ ಒಬ್ಬ ಮನುಷ್ಯನು ಬೇತ್ಲೆಹೇಮಿನಲ್ಲಿ ವಾಸಿಸು
ತ್ತಿದ್ದಾನೆ. ನಾನು ಇಷಯನ ಮಗನನ್ನು ನೋಡಿದ್ದೇನೆ.
ಅವನು ಕಿನ್ನರಿ ಬಾರಿಸುತ್ತಾನೆ. ಅವನು ಧೈರ್ಯಶಾಲಿ
ಮತ್ತು ಒಳ್ಳೆಯ ಹೋರಾಟಗಾರ; ಅವನು ಬುದ್ಧಿವಂತ;
ಅವನು ರೂಪವಂತ; ಅಲ್ಲದೆ ಯೆಹೋವನು ಅವ
ನೊಂದಿಗಿದ್ದಾನೆ’’ ಎಂದು ಹೇಳಿದನು.

19ಸೌಲನು ಸಂದೇಶಕರ ಮೂಲಕ ಇಷಯನಿಗೆ,
‘‘ನಿನಗೆ ದಾವೀದನೆಂಬ ಮಗನಿದ್ದಾನೆ. ಅವನು ನಿನ್ನ
ಕುರಿಗಳನ್ನು ಕಾಯುತ್ತಾನೆ. ಅವನನ್ನು ನನ್ನ ಬಳಿಗೆ
ಕಳುಹಿಸು’’ಎಂದು ತಿಳಿಸಿದನು.

20ಇಷಯನು ಕೆಲವು ರೊಟ್ಟಿಗಳನ್ನೂ ಒಂದು ಸೀಸೆ
ದ್ರಾಕ್ಷಾರಸವನ್ನೂ ಮತ್ತು ಹೋತದ ಮರಿಯನ್ನೂ
ಹೇಸರ ಕತ್ತೆಯ ಮೇಲೆ ಹೇರಿಸಿ ತನ್ನ ಮಗನಾದ
ದಾವೀದನ ಮೂಲಕ ಸೌಲನಿಗೆ ಕೊಡುಗೆಗಳಾಗಿ
ಕಳುಹಿಸಿದನು.

21ದಾವೀದನು ಸೌಲನ ಹತ್ತಿರಕ್ಕೆ ಹೋಗಿ, ಅವನ
ಮುಂದೆ ನಿಂತನು. ಸೌಲನು ದಾವೀದನನ್ನು ಬಹಳ
ಪ್ರೀತಿಸಿದನು. ದಾವೀದನು ಸೌಲನ ಆಯುಧಗಳನ್ನು
ಹೊರುವ ಸಹಾಯಕನಾದನು. 22ಸೌಲನು ಇಷಯನಿಗೆ,
‘‘ದಾವೀದನು ಇಲ್ಲಿಯೇ ನನ್ನ ಸೇವೆಯಲ್ಲಿ ಇರಲಿ. ನಾನು
ಅವನನ್ನು ಬಹಳ ಪ್ರೀತಿಸುತ್ತೇನೆ’’ ಎಂದು ಸುದ್ದಿಯನ್ನು
ಹೇಳಿ ಕಳುಹಿಸಿದನು.

23ಯೆಹೋವನು ಕಳುಹಿಸಿದ ದುರಾತ್ಮವು ಸೌಲನ
ಮೈಮೇಲೆ ಬಂದಾಗಲೆಲ್ಲಾ, ದಾವೀದನು ಕಿನ್ನರಿಯನ್ನು
ಬಾರಿಸುತ್ತಿದ್ದನು. ಆಗ ದುರಾತ್ಮವು ಸೌಲನನ್ನು ಬಿಟ್ಟು
ಹೋಗಿ ಅವನಿಗೆ ಉಪಶಮನವಾಗುತ್ತಿತ್ತು.

### ಗೊಲ್ಯಾತನು ಇಸ್ರೇಲರ ಮೇಲೆ ಸ್ಪರ್ಧಿಸಿದ್ದು

17 ಫಿಲಿಷ್ಟಿಯರು ತಮ್ಮ ಸೈನ್ಯವನ್ನು ಯುದ್ಧಕ್ಕಾಗಿ
ಒಟ್ಟುಗೂಡಿಸಿದರು. ಅವರು ಯೆಹೂದ
ದೇಶದ ಸೋಕೋವಿನಲ್ಲಿ ಒಟ್ಟುಗೂಡಿದರು. ಅವರು
ಸೋಕೋವಿಗೂ ಅಜೇಕಕ್ಕೂ ಮಧ್ಯದಲ್ಲಿರುವ
ಎಫೆಸ್ದಮ್ಮೀಮ್ ಎಂಬ ಹೆಸರಿನ ಪಟ್ಟಣದಲ್ಲಿ ಪಾಳೆಯ
ಮಾಡಿಕೊಂಡರು.

2ಸೌಲನು ಮತ್ತು ಇಸ್ರೇಲಿನ ಸೈನಿಕರು ಒಟ್ಟಾಗಿ ಸೇರಿ
ಏಲಾ ಕಣಿವೆಯಲ್ಲಿ ಪಾಳೆಯಮಾಡಿಕೊಂಡರು. ಸೌಲನ
ಸೈನಿಕರು ಸಾಲಾಗಿನಿಂತು ಫಿಲಿಷ್ಟಿಯರ ಮೇಲೆ ಯುದ್ಧಕ್ಕೆ
ಸಿದ್ಧರಾದರು. 3ಫಿಲಿಷ್ಟಿಯರು ಒಂದು ಗುಡ್ಡದ ಮೇಲೂ
ಇಸ್ರೇಲರು ಮತ್ತೊಂದು ಗುಡ್ಡದ ಮೇಲೂ ನಿಂತರು.
ಕಣಿವೆಯು ಆ ಎರಡು ಗುಡ್ಡಗಳ ಮಧ್ಯೆ ಇದ್ದಿತು.

4ಫಿಲಿಷ್ಟಿಯರಲ್ಲಿ ಗೊಲ್ಯಾತನೆಂಬ ಹೆಸರಿನ ವೀರ
ಯೋಧನಿದ್ದನು. ಗೊಲ್ಯಾತನು ಗತ್ ಊರಿನವನು.
ಗೊಲ್ಯಾತನು ಒಂಭತ್ತು ಅಡಿ ಎತ್ತರವಾಗಿದ್ದನು. ಗೊಲ್ಯಾ
ತನು ಫಿಲಿಷ್ಟಿಯರ ಪಾಳೆಯದಿಂದ ಹೊರಬಂದನು.
5ಅವನು ತಾಮ್ರದ ಶಿರಸ್ತ್ರಾಣವನ್ನು ಧರಿಸಿದ್ದನು. ಮೀನಿನ
ಮೇಲಿರುವ ಚಿಪ್ಪುಗಳಂತಿದ್ದ ತಾಮ್ರದ ಕವಚವನ್ನು
ಅವನು ತೊಟ್ಟಿದ್ದನು. ಅದು ನೂರಿಪ್ಪತ್ತೈದು ಪೌಂಡ್
ಗಳಷ್ಟು ಭಾರವಾಗಿತ್ತು. 6ಗೊಲ್ಯಾತನು ಕಾಲುಗಳಿಗೂ
ತಾಮ್ರದ ಕವಚವನ್ನು ತೊಟ್ಟಿದ್ದನು. ಅವನು ಹೆಗಲಿನಲ್ಲಿ
ತಾಮ್ರದ ಈಟಿಯನ್ನು ಕಟ್ಟಿಕೊಂಡಿದ್ದನು. 7ಗೊಲ್ಯಾತನ
ಈಟಿಯ ಹಿಡಿಕೆಯು ನೇಕಾರನ ಕುಂಟೆಯ ಗಾತ್ರ
ದಷ್ಟಿತ್ತು. ಆ ಈಟಿಯ ಅಲಗಿನ ಭಾರವು ಹದಿನೈದು
ಪೌಂಡ್‌ಗಳಷ್ಟಿತ್ತು. ಗೊಲ್ಯಾತನ ಗುರಾಣಿಯನ್ನು
ಹೊತ್ತಿದ್ದ ಅವನ ಸಹಾಯಕನು ಅವನ ಮುಂದೆ ಹೋಗು
ತ್ತಿದ್ದನು. 8ಗೊಲ್ಯಾತನು ಪ್ರತಿದಿನ ಹೊರಕ್ಕೆ ಬಂದು
ಇಸ್ರೇಲಿನ ಸೈನಿಕರನ್ನು ಕಂಡು ಆರ್ಭಟಿಸುತ್ತಿದ್ದನು.
ಅವನು, ''ನೀವೆಲ್ಲ ಸಾಲಾಗಿನಿಂತು ಯುದ್ಧಕ್ಕೆ ಸಿದ್ಧರಾಗಿ
ರುವುದೇಕೆ? ನೀವು ಸೌಲನ ಸೇವಕರು. ನಾನು ಫಿಲಿಷ್ಟಿ
ಯನು, ನೀವು ಒಬ್ಬನನ್ನು ಆರಿಸಿ ನನ್ನೊಡನೆ ಹೋರಾ
ಡಲು ಕಳುಹಿಸಿ. 9ಅವನು ನನ್ನನ್ನು ಕೊಂದುಬಿಟ್ಟರೆ, ನಾವು
ಅಂದರೆ ಫಿಲಿಷ್ಟಿಯರೆಲ್ಲ ನಿಮ್ಮ ಗುಲಾಮರಾಗುತ್ತೇವೆ.
ಆದರೆ ನಾನು ಅವನನ್ನು ಸೋಲಿಸಿ ಕೊಂದುಬಿಟ್ಟರೆ,
ನೀವೆಲ್ಲ ನಮಗೆ ಗುಲಾಮರಾಗಿದ್ದು ನಮ್ಮ ಸೇವೆಯನ್ನು
ಮಾಡಬೇಕು'' ಎಂದು ಆರ್ಭಟಿಸಿದನು.

10ಫಿಲಿಷ್ಟಿಯನು, ''ಈ ದಿನ ನಾನು ಇಸ್ರೇಲ್ ಸೈನ್ಯವನ್ನು
ಹೀಯಾಳಿಸುವೆನು. ನನ್ನೊಂದಿಗೆ ಹೋರಾಡಲು ನಿಮ್ಮ
ಮನುಷ್ಯನೊಬ್ಬನನ್ನು ಕಳುಹಿಸಿ'' ಎಂದು ಹೇಳಿದನು.

11ಸೌಲನು ಮತ್ತು ಅವನ ಸೈನಿಕರು ಗೊಲ್ಯಾತನು
ಹೇಳಿದ್ದನ್ನು ಕೇಳಿ ಬಹಳ ಭಯಪಟ್ಟರು.

### ದಾವೀದನು ಯುದ್ಧರಂಗದ ಮುಂಭಾಗಕ್ಕೆ ಬರುವನು

12ದಾವೀದನು ಇಷಯನ ಮಗ. ಇಷಯನು
ಯೆಹೂದ ಪ್ರಾಂತ್ಯದ ಬೇತ್ಲೆಹೇಮಿನ ಎಫ್ರಾತ ವಂಶದ
ವನು. ಇಷಯನಿಗೆ ಎಂಟು ಜನ ಮಕ್ಕಳಿದ್ದರು. ಸೌಲನ
ಕಾಲಕ್ಕಾಗಲೇ ಇಷಯನು ಮುದುಕನಾಗಿದ್ದನು.
13ಇಷಯನ ಮೂವರು ಹಿರಿಯ ಮಕ್ಕಳು ಸೌಲ
ನೊಂದಿಗೆ ಯುದ್ಧಕ್ಕೆ ಹೋಗಿದ್ದರು. ಎಲೀಯಾಬನು
ಮೊದಲನೆಯ ಮಗ. ಅಬೀನಾದಾಬನು ಎರಡನೆಯ
ಮಗ. ಶಮ್ಮನು ಮೂರನೆಯ ಮಗ. 14ದಾವೀದನು
ಎಲ್ಲರಿಗಿಂತ ಕಿರಿಯ ಮಗ. ಅವನಿಗಿಂತ ಹಿರಿಯರಾದ
ಮೂವರು ಮಕ್ಕಳು ಸೌಲನ ಸೈನ್ಯದಲ್ಲಿದ್ದರು. 15ಆದರೆ
ದಾವೀದನು ಆಗಾಗ್ಗೆ ಸೌಲನನ್ನು ತ್ಯಜಿಸಿ, ತಂದೆಯ
ಕುರಿಗಳನ್ನು ಕಾಯುವುದಕ್ಕಾಗಿ ಬೇತ್ಲೆಹೇಮಿಗೆ
ಹೋಗುತ್ತಿದ್ದನು.

16ಪ್ರತಿ ದಿನ ಬೆಳಿಗ್ಗೆ ಮತ್ತು ಸಂಜೆ ಗೊಲ್ಯಾತನು ಹೊರ
ಬಂದು ಇಸ್ರೇಲ್ ಸೈನ್ಯಕ್ಕೆ ಎದುರಾಗಿ ನಿಲ್ಲುತ್ತಿದ್ದನು. ಈ
ರೀತಿ ಗೊಲ್ಯಾತನು ಇಸ್ರೇಲರನ್ನು ನಲವತ್ತು ದಿನಗಳ ಕಾಲ
ಹೀಯಾಳಿಸಿದನು.

17ಒಂದು ದಿನ ಇಷಯನು ತನ್ನ ಮಗನಾದ ದಾವೀದ
ನಿಗೆ, ''ಬೇಯಿಸಿದ ಮೂವತ್ತು ಸೇರು ಕಾಳುಗಳನ್ನು
ಮತ್ತು ಹತ್ತು ರೊಟ್ಟಿಗಳನ್ನು ಸೈನ್ಯದಲ್ಲಿರುವ ನಿನ್ನ
ಸಹೋದರರಿಗಾಗಿ ತೆಗೆದುಕೊಂಡು ಹೋಗು. 18ನಿನ್ನ
ಸಹೋದರರ ಸಹಸ್ರಾಧಿಪತಿಗೆ ಹತ್ತು ಉಂಡೆ ಗಿಣ್ಣನ್ನೂ
ತೆಗೆದುಕೊಂಡು ಹೋಗು. ನಿನ್ನ ಸಹೋದರರ ಕ್ಷೇಮ
ಸಮಾಚಾರವನ್ನು ಕೇಳಿಕೊಂಡು, ಅವರು ಕ್ಷೇಮ
ವಾಗಿದ್ದಾರೆಂಬುದಕ್ಕೆ ಒಂದು ಗುರುತನ್ನು ತೆಗೆದುಕೊಂಡು
ಬಾ. 19ನಿನ್ನ ಸಹೋದರರು ಎಲ್ಲಾ ಇಸ್ರೇಲ್ ಸೈನಿಕರಂತೆ
ಸೌಲನ ಜೊತೆಯಲ್ಲಿ ಏಲಾ ಕಣಿವೆಯಲ್ಲಿದ್ದಾರೆ. ಅವರು
ಫಿಲಿಷ್ಟಿಯರ ವಿರುದ್ಧ ಹೋರಾಡುತ್ತಿದ್ದಾರೆ'' ಎಂದು
ಹೇಳಿದನು.

20ದಾವೀದನು ಮಾರನೆಯ ದಿನ ಬೆಳಿಗ್ಗೆ ಕುರುಬ
ನೊಬ್ಬನಿಗೆ ತನ್ನ ಕುರಿಗಳನ್ನು ಕಾಯಲು ಒಪ್ಪಿಸಿದನು.
ಇಷಯನು ತಿಳಿಸಿದಂತೆ ದಾವೀದನು ಆಹಾರವನ್ನೆಲ್ಲ
ತೆಗೆದುಕೊಂಡು ಹೊರಟನು. ದಾವೀದನು ತನ್ನ ಬಂಡಿ
ಯನ್ನು ಪಾಳೆಯಕ್ಕೆ ಹೊಡೆದುಕೊಂಡು ಹೋದನು.
ದಾವೀದನು ಅಲ್ಲಿಗೆ ಬರುವಷ್ಟರಲ್ಲಿ ಸೈನಿಕರೆಲ್ಲರು
ಯುದ್ಧಭೂಮಿಗೆ ಹೋಗುವುದರಲ್ಲಿದ್ದರು. ಸೈನಿಕ
ರೆಲ್ಲರು ಆರ್ಭಟಿಸುತ್ತಾ ಯುದ್ಧಭೂಮಿಯಲ್ಲಿ ಸೇರು
ತ್ತಿದ್ದರು. 21ಇಸ್ರೇಲರು ಮತ್ತು ಫಿಲಿಷ್ಟಿಯರು ಯುದ್ಧಕ್ಕೆ
ಸಿದ್ಧರಾಗಲು ಸಾಲುಸಾಲಾಗಿ ನಿಲ್ಲುತ್ತಿದ್ದರು.

22ದಾವೀದನು ತಾನು ತಂದಿದ್ದವುಗಳನ್ನು ಕಾವಲು
ಗಾರನ ಬಳಿಯಲ್ಲಿಟ್ಟು ಇಸ್ರೇಲ್ ಸೈನಿಕರಿದ್ದ ಸ್ಥಳಕ್ಕೆ

ಓಡಿಹೋಗಿ ತನ್ನ ಸೋದರರ ಬಗ್ಗೆ ವಿಚಾರಿಸಿದನು.
23ಬಳಿಕ ತನ್ನ ಸೋದರರನ್ನು ಕಂಡುಕೊಂಡು ಅವ
ರೊಂದಿಗೆ ಮಾತಾಡತೊಡಗಿದನು.

### ದಾವೀದನು ಗೊಲ್ಯಾತನನ್ನು ಯುದ್ಧಕ್ಕೆ ಆಹ್ವಾನಿಸುವನು

ಆ ಸಮಯದಲ್ಲಿ ಗತ್ ದೇಶದ ಗೊಲ್ಯಾತನೆಂಬ
ಹೆಸರಿನ ಫಿಲಿಷ್ಟಿಯ ರಣವೀರನು ಆ ಸೇನೆಯಿಂದ
ಹೊರಬಂದನು. ಗೊಲ್ಯಾತನು ಎಂದಿನಂತೆ ಇಸ್ರೇಲರ
ವಿರುದ್ಧ ಆರ್ಭಟಿಸಿದನು. ದಾವೀದನಿಗೆ ಅವನ
ಆರ್ಭಟವು ಕೇಳಿಸಿತು. 24ಇಸ್ರೇಲ್ ಸೈನಿಕರು ಗೊಲ್ಯಾತ
ನನ್ನು ಕಂಡು ಓಡಿಹೋದರು. ಅವರೆಲ್ಲ ಅವನನ್ನು ಕಂಡು
ಭಯಗೊಂಡರು.

25ಇಸ್ರೇಲರಲ್ಲಿನ ಒಬ್ಬನು, ''ನೀವು ಅವನನ್ನು
ನೋಡಿದಿರಾ! ಅವನನ್ನು ನೋಡಿ! ಆ ಗೊಲ್ಯಾತನು
ದಿನಾಹೊರಗೆ ಬಂದು ಇಸ್ರೇಲರನ್ನು ಮತ್ತೆಮತ್ತೆ
ಹಾಸ್ಯಮಾಡುತ್ತಿದ್ದಾನೆ. ಅವನನ್ನು ಕೊಂದವನಿಗೆ ಸೌಲನು
ಅವನಿಗೆ ಅಪಾರ ಐಶ್ವರ್ಯವನ್ನು ಕೊಡುವುದಲ್ಲದೆ ತನ್ನ
ಮಗಳನ್ನೂ ಕೊಟ್ಟು ಮದುವೆ ಮಾಡುತ್ತಾನೆ; ಅಲ್ಲದೆ
ಅವನ ವಂಶವನ್ನು ಇಸ್ರೇಲಿನಲ್ಲಿ ಸ್ವತಂತ್ರಗೊಳಿಸುತ್ತಾನೆ''
ಎಂದು ಹೇಳಿದನು.

26ದಾವೀದನು ತನ್ನ ಹತ್ತಿರ ನಿಂತಿದ್ದ ಮನುಷ್ಯನನ್ನು ''ಈ
ಫಿಲಿಷ್ಟಿಯನನ್ನು ಕೊಂದು ಇಸ್ರೇಲರಿಗೆ ಉಂಟಾಗಿರುವ
ಅಪನಿಂದೆಯನ್ನು ಹೋಗಲಾಡಿಸುವವನಿಗೆ ಸಿಗುವ
ಬಹುಮಾನವೇನು? ಈ ಗೊಲ್ಯಾತನಾದರೂ ಯಾರು?
ಇವನು ಕೇವಲ ಒಬ್ಬ ಪರದೇಶಿ. ಗೊಲ್ಯಾತನು ಫಿಲಿಷ್ಟಿ
ಯನೇ ಹೊರತು ಬೇರೆ ಯಾರೂ ಅಲ್ಲ. ಜೀವ
ಸ್ವರೂಪನಾದ ಯೆಹೋವನ ಸೈನ್ಯದ ವಿರೋಧವಾಗಿ
ಮಾತಾಡಲು ಇವನು ತನ್ನನ್ನು ಯಾರೆಂದು ಯೋಚಿಸಿ
ಕೊಂಡಿದ್ದಾನೆ?'' ಎಂದನು.

27ಗೊಲ್ಯಾತನನ್ನು ಕೊಲ್ಲುವದರಿಂದ ಸಿಗುವ ಬಹು
ಮಾನವನ್ನು ಇಸ್ರೇಲರು ದಾವೀದನಿಗೆ ತಿಳಿಸಿದರು.
28ದಾವೀದನು ಸೈನಿಕರೊಡನೆ ಮಾತನಾಡುವುದನ್ನು
ಅವನ ಹಿರಿಯ ಅಣ್ಣ ಎಲೀಯಾಬನು ಕೇಳಿಸಿಕೊಂಡನು.
ಎಲೀಯಾಬನು ದಾವೀದನ ಮೇಲೆ ಕೋಪಗೊಂಡು
ಅವನಿಗೆ, ''ನೀನು ಇಲ್ಲಿಗೆ ಬಂದದ್ದೇಕೆ? ಅಲ್ಲಿದ್ದ ಕೆಲವು
ಕುರಿಗಳನ್ನು ಯಾರ ಬಳಿ ಬಿಟ್ಟಿರುವೆ? ನೀನು ಇಲ್ಲಿಗೆ ಏಕೆ
ಬಂದಿರುವೆಯೆಂಬುದು ನನಗೆ ಗೊತ್ತು. ನಿನಗೆ ಹೇಳಿ
ದ್ದನ್ನು ನೀನು ಮಾಡುವುದಿಲ್ಲ. ನೀನು ಕೇವಲ ಯುದ್ಧ
ವನ್ನು ನೋಡುವುದಕ್ಕಾಗಿಯೇ ಇಲ್ಲಿಗೆ ಬಂದಿರುವೆ''
ಎಂದು ಹೇಳಿದನು.

29ದಾವೀದನು, ''ನಾನೇನು ಮಾಡಿದೆ? ನಾನು ಯಾವ
ತಪ್ಪನ್ನೂ ಮಾಡಲಿಲ್ಲ. ನಾನು ಕೇವಲ ಮಾತನಾಡುತ್ತಿದ್ದೆ''
ಎಂದು ಹೇಳಿದನು. 30ದಾವೀದನು ಬೇರೆ ಜನರ ಕಡೆಗೆ
ತಿರುಗಿ, ಅವರಿಗೂ ಅದೇ ಪ್ರಶ್ನೆಗಳನ್ನು ಕೇಳಿದನು.
ಅವರು ಸಹ ಅದೇ ಉತ್ತರಗಳನ್ನು ದಾವೀದನಿಗೆ
ಕೊಟ್ಟರು.

31ದಾವೀದನು ಮಾತನಾಡುತ್ತಿರುವುದನ್ನು ಕೆಲವು
ಜನರು ಕೇಳಿಸಿಕೊಂಡರು. ಅವರು ಸೌಲನಿಗೆ ದಾವೀದನ
ಬಗ್ಗೆ ಹೇಳಿದರು. ಸೌಲನು ದಾವೀದನನ್ನು ಅವನ ಹತ್ತಿರ
ಕರೆತರಲು ಅಪ್ಪಣೆ ಮಾಡಿದನು. 32ದಾವೀದನು ಸೌಲ
ನಿಗೆ, ''ಜನರು ಗೊಲ್ಯಾತನಿಗೆ ಹೆದರಿಕೊಳ್ಳುವುದು ಬೇಕಾ
ಗಿಲ್ಲ. ನಾನು ನಿನ್ನ ಸೇವಕ. ನಾನು ಈ ಫಿಲಿಷ್ಟಿಯನ ವಿರುದ್ಧ
ಹೋರಾಡುತ್ತೇನೆ'' ಎಂದು ಹೇಳಿದನು.

33ಸೌಲನು, ''ನೀನು ಹೊರಗೆ ಹೋಗಿ ಗೊಲ್ಯಾತ
ನೊಂದಿಗೆ ಹೋರಾಡಲು ಸಾಧ್ಯವಿಲ್ಲ. ನೀನು ಒಬ್ಬ
ಸೈನಿಕನೂ ಅಲ್ಲ! ಗೊಲ್ಯಾತನು ಬಾಲ್ಯದಿಂದಲೂ ಯುದ್ಧ
ವೀರನಾಗಿದ್ದಾನೆ'' ಎಂದನು.

34ಆದರೆ ದಾವೀದನು ಸೌಲನಿಗೆ, ''ನಾನು ನಿನ್ನ ಸೇವಕ.
ನಾನು ನಮ್ಮ ತಂದೆಯ ಕುರಿಗಳನ್ನು ಕಾಯುತ್ತಿದ್ದೆ.
ಸಿಂಹವಾಗಲೀ ಕರಡಿಯಾಗಲೀ ಬಂದು ಕುರಿಮಂದೆ
ಯಿಂದ ಕುರಿಗಳನ್ನು ಹಿಡಿದುಕೊಂಡರೆ, 35ಆದನ್ನು
ನಾನು ಅಟ್ಟಿಸಿಕೊಂಡು ಹೋಗುತ್ತಿದ್ದೆ. ನಾನು ಆ ಕ್ರೂರ
ಮೃಗದ ಮೇಲೆ ಆಕ್ರಮಣಮಾಡಿ, ಅದರ ಬಾಯಿಂದ
ಕುರಿಯನ್ನು ಬಿಡಿಸುತ್ತಿದ್ದೆನು. ಅದು ನನ್ನ ಮೇಲೆ
ಆಕ್ರಮಣ ಮಾಡಿದರೆ, ನಾನು ಅದರ ಗಡ್ಡ ಹಿಡಿದು
ಹೋರಾಡಿ ಅದನ್ನು ಕೊಲ್ಲುತ್ತಿದ್ದೆನು. 36ನಾನು ಒಂದು
ಸಿಂಹವನ್ನೂ ಒಂದು ಕರಡಿಯನ್ನೂ ಕೊಂದಿದ್ದೇನೆ. ಅದೇ
ರೀತಿಯಲ್ಲಿ ನಾನು ಅನ್ಯದೇಶಿಯನಾದ ಗೊಲ್ಯಾತನನ್ನೂ
ಕೊಂದುಹಾಕುತ್ತೇನೆ. ಜೀವಸ್ವರೂಪನಾದ ದೇವರ ಸೈನ್ಯ
ವನ್ನು ಹೀಯಾಳಿಸಿದ್ದರಿಂದ ಗೊಲ್ಯಾತನು ಸಾಯಲೇ
ಬೇಕು. 37ಯೆಹೋವನು ನನ್ನನ್ನು ಸಿಂಹದಿಂದಲೂ
ಕರಡಿಯಿಂದಲೂ ರಕ್ಷಿಸಿದನು. ಯೆಹೋವನು ಈ
ಗೊಲ್ಯಾತನಿಂದಲೂ ನನ್ನನ್ನು ರಕ್ಷಿಸುತ್ತಾನೆ'' ಎಂದು
ಹೇಳಿದನು.

ಸೌಲನು ದಾವೀದನಿಗೆ, ''ಹೋಗು, ದೇವರು
ನಿನ್ನೊಂದಿಗಿರಲಿ'' ಎಂದು ಹೇಳಿದನು. 38ಸೌಲನು ತನ್ನ
ಯುದ್ಧವಸ್ತ್ರಗಳನ್ನು ದಾವೀದನಿಗೆ ತೊಡಿಸಿದನು.
ಸೌಲನು ತಾಮ್ರದ ಶಿರಸ್ತ್ರಾಣವನ್ನು ದಾವೀದನ ತಲೆಯ
ಮೇಲಿಟ್ಟನು ಮತ್ತು ಲೋಹದ ಕವಚವನ್ನು ದಾವೀದನ
ಮೈಗೆ ತೊಡಿಸಿದನು. 39ದಾವೀದನು ಕತ್ತಿಯನ್ನು ಸಿಕ್ಕಿಸಿ
ಕೊಂಡು, ಆ ಕಡೆ ಈ ಕಡೆ ಸುತ್ತಾಡಿದನು. ಸೌಲನ ಯುದ್ಧ
ವಸ್ತ್ರಗಳನ್ನು ದಾವೀದನು ಧರಿಸಲು ಪ್ರಯತ್ನಿಸಿದನು.
ಆದರೆ ದಾವೀದನಿಗೆ ಅಂತಹ ಭಾರದ ವಸ್ತ್ರಗಳನ್ನು ಧರಿಸಿ
ಅಭ್ಯಾಸವಿರಲಿಲ್ಲ.

ದಾವೀದನು ಸೌಲನಿಗೆ, ''ನಾನು ಇವುಗಳನ್ನು ಧರಿಸಿ
ಕೊಂಡು ಹೋರಾಡಲಾಗುವುದಿಲ್ಲ; ನನಗೆ ಇವುಗಳನ್ನು

ಧರಿಸಿಕೊಂಡು ಅಭ್ಯಾಸವಿಲ್ಲ'' ಎಂದು ಹೇಳಿ ಅವು
ಗಳನ್ನೆಲ್ಲ ತೆಗೆದುಹಾಕಿದನು. 40ದಾವೀದನು ತನ್ನ
ಕೋಲನ್ನು ಕೈಯಲ್ಲಿ ಹಿಡಿದುಕೊಂಡು, ಕಣಿವೆಯಲ್ಲಿ
ಐದು ನುಣುಪುಕಲ್ಲುಗಳನ್ನು ಆರಿಸಿಕೊಂಡು ಅವುಗಳನ್ನು
ಕುರಿಕಾಯಲು ಬಳಸುವ ಚೀಲದಲ್ಲಿ ಹಾಕಿಕೊಂಡು
ಕವಣೆಯನ್ನು ಕೈಯಲ್ಲಿ ಹಿಡಿದುಕೊಂಡನು. ನಂತರ
ಗೊಲ್ಯಾತನನ್ನು ಎದುರಿಸಲು ಹೋದನು.

## ದಾವೀದನು ಗೊಲ್ಯಾತನನ್ನು ಕೊಂದದ್ದು

41ಫಿಲಿಷ್ಟಿಯನು (ಗೊಲ್ಯಾತನು) ದಾವೀದನ ಬಳಿಗೆ
ನಿಧಾನವಾಗಿ ನಡೆಯುತ್ತಾ ಬಂದನು. ಗೊಲ್ಯಾತನ
ಮುಂದೆ ಅವನ ಸಹಾಯಕನು ಗುರಾಣಿಯನ್ನು ಹೊತ್ತು
ಕೊಂಡು ನಡೆಯುತ್ತಾ ಹೋದನು. 42ಗೊಲ್ಯಾತನು
ದಾವೀದನನ್ನು ನೋಡಿ ನಕ್ಕನು. ದಾವೀದನು ಸೈನಿಕನಲ್ಲ
ವೆಂಬುದು ಗೊಲ್ಯಾತನಿಗೆ ಗೊತ್ತಾಯಿತು. ದಾವೀದನು
ಕೆಂಬಣ್ಣದ ಸುಂದರ ಯುವಕನಾಗಿದ್ದನು. 43ಗೊಲ್ಯಾತನು
ದಾವೀದನಿಗೆ, ''ಈ ದೊಣ್ಣೆ ಏತಕ್ಕಾಗಿ? ನಾಯಿಯನ್ನು
ಓಡಿಸುವಂತೆ ನನ್ನನ್ನು ಓಡಿಸುವುದಕ್ಕೆ ಬಂದೆಯಾ?''
ಎಂದು ಕೇಳಿದನು. ಬಳಿಕ ಗೊಲ್ಯಾತನು ತನ್ನ ದೇವರುಗಳ
ಹೆಸರುಗಳ ಮೇಲೆ ದಾವೀದನನ್ನು ಶಪಿಸಿದನು.
44ಗೊಲ್ಯಾತನು ದಾವೀದನಿಗೆ, ''ಬಾ ಇಲ್ಲಿಗೆ, ನಿನ್ನ ದೇಹ
ವನ್ನು ಪಕ್ಷಿಗಳಿಗೂ ಕ್ರೂರ ಪ್ರಾಣಿಗಳಿಗೂ ಆಹಾರವನ್ನಾಗಿ
ಮಾಡುತ್ತೇನೆ!'' ಎಂದನು.

45ದಾವೀದನು ಫಿಲಿಷ್ಟಿಯನಿಗೆ (ಗೊಲ್ಯಾತನಿಗೆ),
''ನೀನಾದರೋ ಖಡ್ಗ, ಈಟಿ ಮತ್ತು ಭರ್ಜಿಗಳನ್ನು
ಹಿಡಿದುಕೊಂಡು ನನ್ನ ಬಳಿಗೆ ಬಂದಿರುವೆ. ನಾನಾದರೋ
ಸರ್ವಶಕ್ತನೂ ಇಸ್ರೇಲರ ಸೈನ್ಯಗಳ ದೇವರೂ ಆಗಿರುವ
ಯೆಹೋವನ ಹೆಸರಿನಲ್ಲಿ ನಿನ್ನ ಬಳಿಗೆ ಬಂದಿರುವೆ! ನೀನು
ಹೀಯಾಳಿಸಿದ್ದು ಆತನನ್ನೇ. 46ಇಂದು ನಾನು ನಿನ್ನನ್ನು
ಸೋಲಿಸುವಂತೆ ಯೆಹೋವನು ತನ್ನ ಪರಾಕ್ರಮವನ್ನು
ತೋರಿಸಲಿ. ನಾನು ನಿನ್ನನ್ನು ಕೊಲ್ಲುತ್ತೇನೆ. ಇಂದು ನಾನು
ನಿನ್ನ ತಲೆಯನ್ನು ಕತ್ತರಿಸಿ ನಿನ್ನ ದೇಹವನ್ನು ಪಕ್ಷಿಗಳಿಗೂ
ಕ್ರೂರಮೃಗಗಳಿಗೂ ಆಹಾರವನ್ನಾಗಿ ಕೊಡುತ್ತೇನೆ. ಉಳಿ
ದೆಲ್ಲ ಫಿಲಿಷ್ಟಿಯರಿಗೂ ಸಹ ನಾವು ಅದೇ ರೀತಿ ಮಾಡು
ತ್ತೇವೆ. ಆಗ ಇಸ್ರೇಲಿನಲ್ಲಿ ದೇವರಿದ್ದಾನೆಂಬುದು ಇಡೀ
ಜಗತ್ತಿಗೆಲ್ಲ ಗೊತ್ತಾಗುವುದು! 47ಜನರನ್ನು ರಕ್ಷಿಸಲು
ಯೆಹೋವನಿಗೆ ಕತ್ತಿ ಮತ್ತು ಈಟಿಗಳ ಅಗತ್ಯವಿಲ್ಲ
ಎಂಬುದು ಇಲ್ಲಿ ಸೇರಿರುವ ಜನರಿಗೆಲ್ಲ ತಿಳಿಯುತ್ತದೆ.
ಇದು ಯೆಹೋವನ ಯುದ್ಧ. ಫಿಲಿಷ್ಟಿಯರನ್ನೆಲ್ಲ ಸೋಲಿ
ಸಲು ಯೆಹೋವನು ನಮಗೆ ಸಹಾಯ ಮಾಡುತ್ತಾನೆ''
ಎಂದು ಹೇಳಿದನು.

48ಫಿಲಿಷ್ಟಿಯನಾದ ಗೊಲ್ಯಾತನು ಆಕ್ರಮಣ ಮಾಡಲು
ದಾವೀದನ ಹತ್ತಿರಕ್ಕೆ ಬಂದನು. ದಾವೀದನೂ ಗೊಲ್ಯಾ
ತನನ್ನು ಸಂಧಿಸಲು ವೇಗವಾಗಿ ಓಡಿದನು. 49ದಾವೀದನು
ತನ್ನ ಚೀಲದಿಂದ ಒಂದು ಕಲ್ಲನ್ನು ಹೊರತೆಗೆದನು.
ಅದನ್ನು ಅವನು ಕವಣೆಯಲ್ಲಿ ಸಿಕ್ಕಿಸಿ ಬೀಸಿ ಹೊಡೆದನು.
ಕವಣೆಯಿಂದ ಅವನು ಬೀಸಿದ ಕಲ್ಲು ಗೊಲ್ಯಾತನ ಹಣೆಗೆ
ಬಡಿಯಿತು. ಆ ಕಲ್ಲು ಅವನ ಹಣೆಯಲ್ಲಿ ಆಳವಾದ ಗಾಯ
ವನ್ನು ಮಾಡಿತು. ಕೂಡಲೇ ಗೊಲ್ಯಾತನು ಬೋರಲಾಗಿ
ನೆಲದ ಮೇಲೆ ಬಿದ್ದನು.

50ಹೀಗೆ ದಾವೀದನು ಕವಣೆಯ ಒಂದೇ ಕಲ್ಲಿನಿಂದ
ಫಿಲಿಷ್ಟಿಯನನ್ನು ಹೊಡೆದು ಕೊಂದನು! ದಾವೀದನು
ಕತ್ತಿಯನ್ನೂ ಹೊಂದಿರಲಿಲ್ಲ. 51ದಾವೀದನು ಓಡುತ್ತಾ
ಹೋಗಿ ಫಿಲಿಷ್ಟಿಯನ ಪಕ್ಕದಲ್ಲಿ ನಿಂತುಕೊಂಡನು.
ದಾವೀದನು ಗೊಲ್ಯಾತನ ಕತ್ತಿಯನ್ನು ಒರೆಯಿಂದ ತೆಗೆದು
ಅದೇ ಕತ್ತಿಯಿಂದ ಅವನ ತಲೆಯನ್ನು ಕತ್ತರಿಸಿಹಾಕಿದನು.
ದಾವೀದನು ಈ ರೀತಿಯಲ್ಲಿ ಫಿಲಿಷ್ಟಿಯನನ್ನು ಕೊಂದನು.

ಫಿಲಿಷ್ಟಿಯರು ತಮ್ಮ ನಾಯಕನು ಸತ್ತದ್ದನ್ನು ನೋಡಿ
ದಾಗ ಹಿಂದಿರುಗಿ ಓಡಿಹೋದರು. 52ಇಸ್ರೇಲಿನ ಮತ್ತು
ಯೆಹೂದದ ಸೈನಿಕರು ಆರ್ಭಟಮಾಡುತ್ತಾ ಫಿಲಿಷ್ಟಿಯರ
ಬೆನ್ನಟ್ಟಿದರು. ಇಸ್ರೇಲರು ಫಿಲಿಷ್ಟಿಯರನ್ನು ಗತ್ ನಗರದ
ಗಡಿಯವರೆಗೂ ಎಕ್ರೋನ್ ಬಾಗಿಲವರೆಗೂ ಅಟ್ಟಿಸಿ
ಕೊಂಡು ಹೋದರು. ಅವರು ಅನೇಕ ಫಿಲಿಷ್ಟಿಯರನ್ನು
ಕೊಂದರು. ಅವರ ಶವಗಳು ಶಾರಯಿಮಿನ ಮಾರ್ಗ
ದುದ್ದಕ್ಕೂ ಗತ್ ಮತ್ತು ಎಕ್ರೋನ್‌ಗಳವರೆಗೆ ಬಿದ್ದಿದ್ದವು.
53ಫಿಲಿಷ್ಟಿಯರನ್ನು ಅಟ್ಟಿಸಿಕೊಂಡು ಹೋಗಿದ್ದ
ಇಸ್ರೇಲರು ಫಿಲಿಷ್ಟಿಯರ ಪಾಳೆಯಕ್ಕೆ ನುಗ್ಗಿ ಅವರ
ಪಾಳೆಯದಲ್ಲಿದ್ದ ಅನೇಕ ವಸ್ತುಗಳನ್ನು ವಶಪಡಿಸಿ
ಕೊಂಡರು. 54ದಾವೀದನು ಫಿಲಿಷ್ಟಿಯನ ತಲೆಯನ್ನು
ಜೆರುಸಲೇಮಿಗೆ ತೆಗೆದುಕೊಂಡು ಹೋದನು.
ದಾವೀದನು ಫಿಲಿಷ್ಟಿಯರ ಆಯುಧಗಳನ್ನು ತನ್ನ
ಗುಡಾರದಲ್ಲೇ ಇರಿಸಿಕೊಂಡನು.

## ಸೌಲನು ದಾವೀದನ ಬಗ್ಗೆ ಹೆದರಲಾರಂಭಿಸಿದನು.

55ದಾವೀದನು ಗೊಲ್ಯಾತನೊಂದಿಗೆ ಯುದ್ಧಕ್ಕೆ
ಹೊರಟಿದ್ದನ್ನು ಸೌಲನು ಗಮನಿಸುತ್ತಿದ್ದನು. ಸೌಲನು
ತನ್ನ ಸೇನಾಧಿಪತಿಯಾದ ಅಬ್ನೇರನನ್ನು, ''ಆ ಯುವಕನ
ತಂದೆ ಯಾರು'' ಎಂದು ಪ್ರಶ್ನಿಸಿದನು.

ಅಬ್ನೇರನು, ''ಅರಸನೇ, ನನ್ನ ಜೀವದಾಣೆ, ಅವನು
ಯಾರೂ ನನಗೆ ಗೊತ್ತಿಲ್ಲ'' ಎಂದು ಹೇಳಿದನು.

56ಅದಕ್ಕೆ ಅರಸನು, ''ಆ ಯುವಕನ ತಂದೆ
ಯಾರೆಂಬುದನ್ನು ಪತ್ತೆಹಚ್ಚು'' ಎಂದು ಹೇಳಿದನು.

57ದಾವೀದನು ಗೊಲ್ಯಾತನನ್ನು ಕೊಂದು ಹಿಂದಿರು
ಗಿದಾಗ, ಅಬ್ನೇರನು ಅವನನ್ನು ಸೌಲನ ಹತ್ತಿರಕ್ಕೆ ಕರೆ
ತಂದನು. ದಾವೀದನು ಫಿಲಿಷ್ಟಿಯನ ತಲೆಯನ್ನು ಕೈಯಲ್ಲಿ
ಹಿಡಿದುಕೊಂಡೇ ಇದ್ದನು.

58ಸೌಲನು, ‘‘ಯುವಕನೇ, ನಿನ್ನ ತಂದೆ ಯಾರು?’’
ಎಂದು ಪ್ರಶ್ನಿಸಿದನು.

ದಾವೀದನು, ‘‘ನಾನು ನಿಮ್ಮ ಸೇವಕನಾದ ಬೇತ್ಲೆ
ಹೇಮಿನ ಇಷಯನ ಮಗ’’ ಎಂದು ಉತ್ತರಿಸಿದನು.

### ದಾವೀದ ಮತ್ತು ಯೋನಾತಾನರು ಆತ್ಮೀಯ ಗೆಳೆಯರಾದರು

18 ದಾವೀದನು ಸೌಲನೊಂದಿಗೆ ಮಾತನಾಡಿದ
ಬಳಿಕ ಯೋನಾತಾನನು ದಾವೀದನೊಂದಿಗೆ
ಒಂದಾದನು. ಯೋನಾತಾನನು ತನ್ನನ್ನು ಪ್ರೀತಿಸುವಷ್ಟೇ
ದಾವೀದನನ್ನು ಪ್ರೀತಿಸಲಾರಂಭಿಸಿದನು.

2ಸೌಲನು ಅಂದಿನಿಂದ ದಾವೀದನನ್ನು ತನ್ನ ಜೊತೆ
ಯಲ್ಲಿಯೇ ಇರಿಸಿಕೊಂಡನು. ಸೌಲನು ದಾವೀದನನ್ನು
ಅವನ ತಂದೆಯ ಮನೆಗೆ ಹೋಗಲು ಬಿಡಲಿಲ್ಲ.

3ಯೋನಾತಾನನು ದಾವೀದನನ್ನು ಬಹಳವಾಗಿ
ಪ್ರೀತಿಸುತ್ತಿದ್ದನು. ಆವನು ದಾವೀದನೊಂದಿಗೆ ಒಂದು
ಒಪ್ಪಂದವನ್ನು ಮಾಡಿಕೊಂಡನು. 4ಯೋನಾತಾನನು
ತಾನು ಧರಿಸಿದ್ದ ಮೇಲಂಗಿಯನ್ನೂ ತನ್ನ ಸಮವಸ್ತ್ರವನ್ನೂ
ತನ್ನ ಬಿಲ್ಲನ್ನೂ ಕತ್ತಿಯನ್ನೂ ಸೊಂಟಪಟ್ಟಿಯನ್ನೂ
ದಾವೀದನಿಗೆ ಕೊಟ್ಟನು.

### ಸೌಲನು ದಾವೀದನ ಯಶಸ್ಸನ್ನು ಗಮನಿಸಿದನು

5ಸೌಲನು ದಾವೀದನನ್ನು ಬೇರೆಬೇರೆ ಯುದ್ಧಗಳಲ್ಲಿ
ಹೋರಾಡಲು ಕಳುಹಿಸಿದನು. ದಾವೀದನು ಆ ಯುದ್ಧ
ಗಳಲ್ಲೆಲ್ಲಾ ಯಶ್ವಸಿಯಾದನು. ಆದ್ದರಿಂದ ಸೌಲನು
ದಾವೀದನನ್ನು ಸೈನ್ಯಾಧಿಪತಿಯನ್ನಾಗಿ ನೇಮಿಸಿದನು.
ಇದು ಸೌಲನ ಅಧಿಕಾರಿಗಳಿಗೂ ಇತರರಿಗೂ ಸಂತಸ
ವನ್ನು ಉಂಟುಮಾಡಿತು! 6ದಾವೀದನು ಫಿಲಿಷ್ಟಿಯ
ರೊಡನೆ ಹೋರಾಡಲು ಹೋಗುತ್ತಿದ್ದನು. ಯುದ್ಧದ
ನಂತರ ಅವನು ಮನೆಗೆ ಹಿಂದಿರುಗುತ್ತಿದ್ದನು. ಇಸ್ರೇಲಿನ
ಎಲ್ಲ ಪಟ್ಟಣಗಳಲ್ಲೂ ಹೆಂಗಸರು ದಾವೀದನನ್ನು
ನೋಡುವುದಕ್ಕಾಗಿ ಹೊರಬರುತ್ತಿದ್ದರು. ಅವರು
ಡೋಲು ಮುಂತಾದ ವಾದ್ಯಗಳನ್ನು ಬಾರಿಸುತ್ತಾ ಕೇಕೆ
ಹಾಕಿ ನಗುತ್ತಾ ನರ್ತಿಸುತ್ತಿದ್ದರು. ಅವರು ಸೌಲನ
ಸಮ್ಮುಖದಲ್ಲಿಯೇ ಇವನ್ನೆಲ್ಲ ಮಾಡುತ್ತಿದ್ದರು.
7ಹೆಂಗಸರು,

‘‘ಸೌಲನು ಸಾವಿರಾರು ಶತ್ರುಗಳನ್ನು ಕೊಂದರೆ,
ದಾವೀದನು ಲಕ್ಷಾಂತರ ಶತ್ರುಗಳನ್ನು
ಕೊಂದನು’’ ಎಂದು ಹಾಡುತ್ತಿದ್ದರು.

8ಹೆಂಗಸರ ಈ ಹಾಡಿನಿಂದ ಸೌಲನು ಬಹಳವಾಗಿ
ವ್ಯಸನಗೊಂಡನು ಮತ್ತು ರೋಷಗೊಂಡನು. ‘ದಾವೀ
ದನು ಲಕ್ಷಾಂತರ ಶತ್ರುಗಳನ್ನು ಕೊಂದನು. ಎಂದು
ಇವರು ಹಾಡುತ್ತಾರಲ್ಲಾ, ಇವನಿಗೆ ರಾಜ್ಯವೊಂದನ್ನು
ಬಿಟ್ಟು ಬೇರೆ ಏನು ಕಡಿಮೆಯಾಯಿತು? ಎಂದು
ಆಲೋಚಿಸತೊಡಗಿದನು. ಸೌಲನು ಸಾವಿರಾರು ಶತ್ರು
ಗಳನ್ನು ಕೊಂದನು’’ ಎಂದು ಹಾಡಿದ ಹೆಂಗಸರ ಮಾತುಗ
ಳಿಂದ ಸೌಲನು ಚಿಂತೆಗೀಡಾದನು. 9ಸೌಲನು ಅಂದಿ
ನಿಂದ ದಾವೀದನನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದನು.

### ಸೌಲನು ದಾವೀದನಿಗೆ ಭಯಪಟ್ಟನು

10ಮಾರನೆಯ ದಿನ, ಯೆಹೋವನಿಂದ ಬಂದ
ದುರಾತ್ಮವು ಸೌಲನನ್ನು ಸಂಪೂರ್ಣವಾಗಿ ವಶಪಡಿಸಿ
ಕೊಂಡಿತು. ಸೌಲನು ತನ್ನ ಮನೆಯಲ್ಲಿ ಹುಚ್ಚನಂತೆ
ಕೂಗಿಕೊಳ್ಳುತ್ತಿದ್ದನು. ಆಗ ದಾವೀದನು ಎಂದಿನಂತೆ
ಕಿನ್ನರಿಯನ್ನು ಬಾರಿಸುತ್ತಿದ್ದನು. 11ಸೌಲನ ಕೈಯಲ್ಲಿ
ಒಂದು ಭರ್ಜಿಯಿತ್ತು. ‘‘ಗೋಡೆಗೆ ಹತ್ತಿಕೊಳ್ಳುವಂತೆ
ನಾನು ದಾವೀದನನ್ನು ತಿವಿಯುವೆ’’ ಎಂದು ಅವನು
ಯೋಚಿಸಿ ಎರಡು ಬಾರಿ ಭರ್ಜಿಯನ್ನು ಎಸೆದನು. ಆದರೆ
ದಾವೀದನು ಎರಡು ಸಲವೂ ತಪ್ಪಿಸಿಕೊಂಡನು.

12ಯೆಹೋವನು ದಾವೀದನ ಜೊತೆಗಿದ್ದನು.
ಯೆಹೋವನು ಸೌಲನನ್ನು ಬಿಟ್ಟುಹೋಗಿದ್ದನು. ಆದು
ದರಿಂದ ಸೌಲನು ದಾವೀದನಿಗೆ ಭಯಪಟ್ಟನು.
13ಸೌಲನು ದಾವೀದನನ್ನು ತನ್ನಿಂದ ದೂರಕಳುಹಿಸಿದನು.
ಸೌಲನು ದಾವೀದನನ್ನು ಒಂದು ಸಾವಿರ ಸೈನಿಕರಿಗೆ
ಸೇನಾಪತಿಯನ್ನಾಗಿ ಮಾಡಿದನು. ದಾವೀದನು ಯುದ್ಧ
ದಲ್ಲಿ ಸೈನಿಕರನ್ನು ಮುನ್ನಡೆಸಿದನು. 14ಯೆಹೋವನು
ದಾವೀದನ ಜೊತೆಗಿದ್ದನು. ಆದ್ದರಿಂದ ದಾವೀದನು
ಎಲ್ಲದರಲ್ಲೂ ಯಶ್ವಸಿಯಾದನು. 15ದಾವೀದನು ಬಹಳ
ವಾಗಿ ಯಶ್ವಸಿಯಾಗುತ್ತಿರುವುದನ್ನು ಕಂಡ ಸೌಲನು
ದಾವೀದನಿಗೆ ಮತ್ತಷ್ಟು ಭಯಪಟ್ಟನು.

16ಆದರೆ ಇಸ್ರೇಲಿನ ಮತ್ತು ಯೆಹೂದದ ಜನರೆಲ್ಲ
ದಾವೀದನನ್ನು ಪ್ರೀತಿಸಿದರು. ಅವನು ಯುದ್ಧದಲ್ಲಿ
ಅವರನ್ನು ಮುನ್ನಡೆಸಿದ್ದರಿಂದ ಮತ್ತು ಅವರಿಗೋಸ್ಕರ
ಹೋರಾಡಿದ್ದರಿಂದ ಅವರು ಅವನನ್ನು ಬಹಳವಾಗಿ
ಪ್ರೀತಿಸಿದರು.

### ಸೌಲನ ಮಗಳೊಂದಿಗೆ ದಾವೀದನ ಮದುವೆ

17ಆದರೆ ಸೌಲನು ದಾವೀದನನ್ನು ಕೊಲ್ಲಬೇಕೆಂದಿ
ದ್ದನು. ದಾವೀದನಿಗೆ ಮೋಸಮಾಡಲು ಸೌಲನು ಒಂದು
ಉಪಾಯವನ್ನು ಹೂಡಿ ಅವನಿಗೆ ‘‘ನನ್ನ ಹಿರಿಯ
ಮಗಳಾದ ಮೇರಬಳು ಇದ್ದಾಳೆ. ನಾನು ಅವಳನ್ನು ನಿನಗೆ
ಮದುವೆ ಮಾಡಿಕೊಡುತ್ತೇನೆ. ಆಗ ನೀನೊಬ್ಬ ಬಲಶಾಲಿ
ಯಾದ ಸೈನಿಕನಾಗುವೆ. ನೀನು ನನಗೆ ಮಗನಂತಿರುವೆ!
ನಂತರ ನೀನು ಹೋಗಿ ಯೆಹೋವನ ಯುದ್ಧಗಳಲ್ಲಿ
ಹೋರಾಡು’’ ಎಂದು ಹೇಳಿದನು. ಇದೊಂದು

ಮೋಸವಾಗಿತ್ತು. ‘‘ಈಗ ನಾನು ದಾವೀದನನ್ನು ಕೊಲ್ಲುವ
ಅಗತ್ಯವಿಲ್ಲ. ನನಗೋಸ್ಕರ ಫಿಲಿಷ್ಟಿಯರೇ ಅವನನ್ನು
ಕೊಲ್ಲುವಂತೆ ಮಾಡುತ್ತೇನೆ’’ ಎಂಬುದು ಸೌಲನ
ನಿಜವಾದ ಆಲೋಚನೆಯಾಗಿತ್ತು.
18ಆದರೆ ದಾವೀದನು, ‘‘ನಾನು ಪ್ರಮುಖ ಕುಲ
ದವನೂ ಅಲ್ಲ; ಪ್ರಮುಖವಾದ ವ್ಯಕ್ತಿಯೂ ಅಲ್ಲ! ರಾಜನ
ಮಗಳನ್ನು ಮದುವೆಯಾಗಲು ನಾನು ಯೋಗ್ಯನಲ್ಲ’’
ಎಂದು ಹೇಳಿದನು.
19ಸೌಲನ ಮಗಳಾದ ಮೇರಬಳಿಗೆ ದಾವೀದನನ್ನು
ಮದುವೆಯಾಗುವ ಕಾಲ ಬಂದಾಗ, ಸೌಲನು ಅವಳನ್ನು
ಮೆಹೋಲದ ಅದ್ರಿಯೇಲನಿಗೆ ಮದುವೆ ಮಾಡಿ
ಕೊಟ್ಟನು.
20ಸೌಲನ ಮತ್ತೊಬ್ಬ ಮಗಳಾದ ಮೀಕಲಳು
ದಾವೀದನನ್ನು ಪ್ರೀತಿಸಿದಳು. ಮೀಕಲಳು ದಾವೀದನನ್ನು
ಪ್ರೀತಿಸುತ್ತಿರುವುದನ್ನು ಸೌಲನಿಗೆ ಜನರು ತಿಳಿಸಿದರು.
ಸೌಲನಿಗೆ ಇದು ಸಂತಸವನ್ನು ಉಂಟುಮಾಡಿತು.
21ಸೌಲನು, ‘‘ನಾನು ದಾವೀದನನ್ನು ಬಲೆಗೆ
ಬೀಳಿಸಲು ಮೀಕಲಳನ್ನು ಬಳಸಿಕೊಳ್ಳುತ್ತೇನೆ. ದಾವೀದ
ನನ್ನು ಮದುವೆಯಾಗಲು ನಾನು ಮೀಕಲಳಿಗೆ ಅವಕಾಶ
ಕೊಡುತ್ತೇನೆ. ನಂತರ ಅವನನ್ನು ಕೊಲ್ಲಲು ಫಿಲಿಷ್ಟಿ
ಯರಿಗೆ ಬಿಟ್ಟುಕೊಡುತ್ತೇನೆ’’ ಎಂದು ಯೋಚಿಸಿದನು.
ಹೀಗೆ ಸೌಲನು ಎರಡನೆಯ ಸಲ ದಾವೀದನಿಗೆ, ‘‘ನೀನು
ನನ್ನ ಮಗಳನ್ನು ಇಂದು ಮದುವೆಯಾಗು’’ ಎಂದು
ಹೇಳಿದನು.
22ಸೌಲನು ತನ್ನ ಅಧಿಕಾರಿಗಳಿಗೆ ಅಪ್ಪಣೆ ಮಾಡಿದನು.
ಸೌಲನು ಅವರಿಗೆ, ‘‘ದಾವೀದನೊಂದಿಗೆ ಪ್ರತ್ಯೇಕವಾಗಿ
ಮಾತನಾಡಿ. ‘ರಾಜನು ನಿನ್ನನ್ನು ಇಷ್ಟಪಟ್ಟಿದ್ದಾನೆ. ಅವನ
ಅಧಿಕಾರಿಗಳೂ ನಿನ್ನನ್ನು ಇಷ್ಟಪಡುತ್ತಾರೆ. ನೀನು ಅವನ
ಮಗಳನ್ನು ಮದುವೆಯಾಗಬೇಕು’ ಎಂದು ಹೇಳಿರಿ’’
ಎಂಬುದಾಗಿ ತಿಳಿಸಿದನು.
23ಸೌಲನ ಅಧಿಕಾರಿಗಳು ದಾವೀದನಿಗೆ ಆ ವಿಚಾರ
ಗಳನ್ನು ತಿಳಿಸಿದರು. ಆದರೆ ದಾವೀದನು, ‘‘ರಾಜನ
ಅಳಿಯನಾಗುವುದು ಸುಲಭವೆಂದು ನೀವು ತಿಳಿದಿರು
ವಿರಾ? ರಾಜನ ಮಗಳಿಗೆ ಕೊಡಲು ನನ್ನ ಹತ್ತಿರ ಹಣವೇ
ಇಲ್ಲ! ನಾನು ಕೇವಲ ಬಡವ, ಸಾಮಾನ್ಯ ಮನುಷ್ಯ’’
ಎಂದು ಉತ್ತರಿಸಿದನು.
24ದಾವೀದನು ತಿಳಿಸಿದ್ದನ್ನೆಲ್ಲ ಸೌಲನ ಅಧಿಕಾರಿಗಳು
ಸೌಲನಿಗೆ ಹೇಳಿದರು. 25ಸೌಲನು ಅವರಿಗೆ, ‘‘ನೀವು
ದಾವೀದನ ಬಳಿಗೆ ಹೋಗಿ ಹೇಳಿ. ‘ನೀನು ರಾಜನ
ಮಗಳಿಗೆ ಹಣ ಕೊಡುವುದು ಬೇಡ! ಸೌಲನು ತನ್ನ ಶತ್ರು
ಗಳ ಮೇಲೆ ಸೇಡನ್ನು ತೀರಿಸಿಕೊಳ್ಳುತ್ತಾನೆ. ಆದುದರಿಂದ
ಅವನ ಮಗಳನ್ನು ಮದುವೆಯಾಗಲು ಕೊಡಬೇಕಾದ
ತೆರವೆಂದರೆ ನೂರು ಮಂದಿ ಫಿಲಿಷ್ಟಿಯರ ಮುಂದೊ
ಗಲುಗಳು’ ಎಂದು ಹೇಳಿರಿ’’ ಎಂಬುದಾಗಿ ತಿಳಿಸಿದನು.
ಸೌಲನ ರಹಸ್ಯವಾದ ಉಪಾಯ ಇದಾಗಿದ್ದಿತು.
ಫಿಲಿಷ್ಟಿಯರು ದಾವೀದನನ್ನು ಕೊಂದುಬಿಡಬಹುದೆಂದು
ಸೌಲನು ಭಾವಿಸಿದ್ದನು.
26ಸೌಲನ ಅಧಿಕಾರಿಗಳು ಆ ಸಂಗತಿಗಳನ್ನು ದಾವೀದ
ನಿಗೆ ತಿಳಿಸಿದರು. ದಾವೀದನು ರಾಜನ ಅಳಿಯನಾಗ
ಬೇಕೆಂದು ಬಯಸಿದನು. ಆದ್ದರಿಂದ ಅವನು ತಕ್ಷಣವೇ
ಕಾರ್ಯನಿರತನಾದನು. 27ದಾವೀದನು ಮತ್ತು ಅವನ
ಜನರು ಫಿಲಿಷ್ಟಿಯರೊಂದಿಗೆ ಹೋರಾಡಲು
ಹೋದರು. ಅವರು ಇನ್ನೂರು ಜನ ಫಿಲಿಷ್ಟಿಯರನ್ನು
ಕೊಂದು ಅವರ ಮುಂದೊಗಲುಗಳನ್ನು ತೆಗೆದುಕೊಂಡು
ಬಂದು ಸೌಲನಿಗೆ ಕೊಟ್ಟರು.
ಆಗ ಸೌಲನು ತನ್ನ ಮಗಳಾದ ಮೀಕಲಳನ್ನು ದಾವೀದ
ನಿಗೆ ಮದುವೆ ಮಾಡಿಕೊಟ್ಟನು. 28ಯೆಹೋವನು
ದಾವೀದನೊಂದಿಗಿರುವುದನ್ನೂ ತನ್ನ ಮಗಳಾದ
ಮೀಕಲಳು ದಾವೀದನನ್ನು ಪ್ರೀತಿಸುತ್ತಿರುವುದನ್ನೂ
ಸೌಲನು ಗಮನಿಸಿದನು. 29ಆದ್ದರಿಂದ ಸೌಲನು
ದಾವೀದನಿಗೆ ಇನ್ನೂ ಹೆಚ್ಚು ಭಯಪಟ್ಟನು. ಸೌಲನು ಆ
ಕಾಲದಲ್ಲೆಲ್ಲ ದಾವೀದನಿಗೆ ವಿರೋಧವಾಗಿದ್ದನು.
30ಫಿಲಿಷ್ಟಿಯ ಸೇನಾಧಿಪತಿಗಳು ಇಸ್ರೇಲರೊಂದಿಗೆ
ಹೋರಾಡಲು ಹೋಗುತ್ತಲೇ ಇದ್ದರು. ಆದರೆ
ದಾವೀದನು ಪ್ರತಿಸಲವೂ ಅವರನ್ನು ಸೋಲಿಸುತ್ತಿದ್ದನು.
ದಾವೀದನು ಸೌಲನ ಒಬ್ಬ ಯಶಸ್ವಿಯಾದ ಅಧಿಕಾರಿ
ಯಾಗಿದ್ದನು! ದಾವೀದನು ಪ್ರಖ್ಯಾತನಾದನು.

### ಯೋನಾತಾನನಿಂದ ದಾವೀದನಿಗೆ ಸಹಾಯ

19 ಸೌಲನು ತನ್ನ ಮಗನಾದ ಯೋನಾತಾನನಿಗೂ
ತನ್ನ ಅಧಿಕಾರಿಗಳಿಗೂ ದಾವೀದನನ್ನು ಕೊಂದು
ಹಾಕಲು ತಿಳಿಸಿದನು. ಆದರೆ ಯೋನಾತಾನನು
ದಾವೀದನನ್ನು ಬಹಳ ಇಷ್ಟಪಡುತ್ತಿದ್ದನು. 2-3ಯೋನಾ
ತಾನನು ದಾವೀದನಿಗೆ, ’’ಎಚ್ಚರಿಕೆಯಿಂದಿರು! ಸೌಲನು
ನಿನ್ನನ್ನು ಕೊಲ್ಲಲು ಅವಕಾಶವನ್ನು ಕಾಯುತ್ತಿದ್ದಾನೆ.
ಬೆಳಿಗ್ಗೆ, ಹೊಲದೊಳಗೆ ಹೋಗಿ ಅಡಗಿಕೊ. ನಾನು ನನ್ನ
ತಂದೆಯೊಡನೆ ಹೊಲಕ್ಕೆ ಬರುತ್ತೇನೆ. ನೀನು ಅಡಗಿರುವ
ಸ್ಥಳದ ಹತ್ತಿರ ನಾವು ನಿಲ್ಲುತ್ತೇವೆ. ನಾನು ನನ್ನ ತಂದೆ
ಯೊಡನೆ ನಿನ್ನ ಬಗ್ಗೆ ಮಾತನಾಡುತ್ತೇನೆ. ನಂತರ ನಾನು
ತಿಳಿದುಕೊಂಡದ್ದನ್ನು ನಿನಗೆ ಹೇಳುತ್ತೇನೆ’’ ಎಂದನು.
4ಯೋನಾತಾನನು ತನ್ನ ತಂದೆಯಾದ ಸೌಲನೊಂದಿಗೆ
ಮಾತನಾಡಿದನು. ಯೋನಾತಾನನು ದಾವೀದನ ಬಗ್ಗೆ
ಒಳ್ಳೆಯ ಸಂಗತಿಗಳನ್ನು ತಿಳಿಸಿದನು. ಯೋನಾತಾನನು,
‘‘ನೀನು ರಾಜ. ದಾವೀದನು ನಿನ್ನ ಸೇವಕ. ದಾವೀದನು
ನಿನಗೆ ಯಾವ ಕೇಡನ್ನೂ ಮಾಡಿಲ್ಲ. ಅದ್ದರಿಂದ ಅವನಿಗೆ
ಯಾವ ಕೇಡನ್ನೂ ಮಾಡಬೇಡ. ದಾವೀದನು ನಿನಗೆ

ಯಾವಾಗಲೂ ಒಳ್ಳೆಯವನಾಗಿಯೇ ಇದ್ದಾನೆ.
5ದಾವೀದನು ಫಿಲಿಷ್ಟಿಯನನ್ನು (ಗೊಲ್ಯಾತ) ಕೊಂದಾಗ ತನ್ನ ಜೀವವನ್ನೇ ಪಣವಾಗಿಟ್ಟಿದ್ದನು. ಯೆಹೋವನು ಇಸ್ರೇಲರೆಲ್ಲರಿಗೂ ಬಹು ದೊಡ್ಡ ವಿಜಯವನ್ನು ಉಂಟು ಮಾಡಿದನು. ನೀನು ಅದನ್ನು ನೋಡಿದೆ ಮತ್ತು ಸಂತೋಷಗೊಂಡೆ. ದಾವೀದನಿಗೆ ಕೇಡುಮಾಡಲು ನೀನು ಏಕೆ ಬಯಸಿರುವೆ? ಅವನು ನಿರಪರಾಧಿ. ಅವನನ್ನು ಕೊಲ್ಲಲು ಯಾವ ಕಾರಣವೂ ಇಲ್ಲ!''ಎಂದು ಹೇಳಿದನು.

6ಯೋನಾತಾನನು ಹೇಳಿದ್ದನ್ನೆಲ್ಲ ಸೌಲನು ಕೇಳಿ, ''ಯೆಹೋವನಾಣೆ, ದಾವೀದನನ್ನು ಕೊಲ್ಲುವುದಿಲ್ಲ'' ಎಂದು ಹೇಳಿದನು.

7ಆದ್ದರಿಂದ ಯೋನಾತಾನನು ದಾವೀದನನ್ನು ಕರೆದು ಅವನಿಗೆ ಎಲ್ಲವನ್ನೂ ತಿಳಿಸಿದನು. ಬಳಿಕ ಯೋನಾತಾನನು ದಾವೀದನನ್ನು ಸೌಲನ ಹತ್ತಿರಕ್ಕೆ ಕರೆದುಕೊಂಡು ಬಂದನು. ದಾವೀದನು ಮೊದಲಿನಂತೆ ಸೌಲನ ಜೊತೆಗಿದ್ದನು.

### ದಾವೀದನನ್ನು ಕೊಲ್ಲಲು ಸೌಲನ ಮರುಪ್ರಯತ್ನ

8ಯುದ್ಧವು ಮತ್ತೆ ಬಂದಿತು. ದಾವೀದನು ಫಿಲಿಷ್ಟಿಯರ ಮೇಲೆ ಯುದ್ಧಕ್ಕೆ ಹೋಗಿ ಅವರನ್ನು ಸೋಲಿಸಿ ಓಡಿಸಿ
ಬಿಟ್ಟನು. 9ಆದರೆ ಯೆಹೋವನಿಂದ ಬಂದ ದುರಾತ್ಮವು
ಸೌಲನ ಮೈಮೇಲೆ ಬಂದಿತು. ಸೌಲನು ತನ್ನ ಮನೆಯಲ್ಲಿ ಕುಳಿತಿದ್ದನು. ಸೌಲನ ಈಟಿಯು ಅವನ ಕೈಯಲ್ಲಿಯೇ ಇದ್ದಿತು. ದಾವೀದನು ಕಿನ್ನರಿಯನ್ನು ಬಾರಿಸುತ್ತಿದ್ದನು.
10ದಾವೀದನನ್ನು ಗೋಡೆಗೆ ಹತ್ತಿಕೊಳ್ಳುವಂತೆ ತಿವಿಯ ಬೇಕೆಂದು ಸೌಲನು ತನ್ನ ಈಟಿಯನ್ನು ಎಸೆದನು. ಆದರೆ ದಾವೀದನು ಸರಿದುಕೊಂಡಿದ್ದರಿಂದ ಈಟಿಯು ಗೋಡೆಗೆ ನಾಟಿಕೊಂಡಿತು. ದಾವೀದನು ಆ ದಿನ ರಾತ್ರಿ ಓಡಿಹೋದನು.

11ಸೌಲನು ದಾವೀದನ ಮನೆಗೆ ತನ್ನ ಜನರನ್ನು ಕಳುಹಿಸಿದನು. ಅವರು ದಾವೀದನ ಮನೆಯನ್ನು ಕಾಯ್ದರು. ಅವರು ರಾತ್ರಿಯೆಲ್ಲಾ ಅಲ್ಲಿಯೇ ಇದ್ದರು. ಅವರು ದಾವೀದನನ್ನು ಬೆಳಿಗ್ಗೆ ಕೊಲ್ಲಲು ಕಾಯು ತ್ತಿದ್ದರು. ಆದರೆ ದಾವೀದನ ಹೆಂಡತಿಯಾದ ಮೀಕಲಳು ಅವನಿಗೆ, ''ನೀನು ಈ ರಾತ್ರಿಯೇ ಓಡಿಹೋಗಿ, ನಿನ್ನ ಜೀವವನ್ನು ಕಾಪಾಡಿಕೋ. ಇಲ್ಲವಾದರೆ, ನಿನ್ನನ್ನು ಅವರು
ಕೊಂದು ಬಿಡುತ್ತಾರೆ'' ಎಂದು ಎಚ್ಚರಿಸಿದಳು. 12ನಂತರ
ಮೀಕಲಳು ಕಿಟಕಿಯಿಂದ ದಾವೀದನನ್ನು ಹೊರಗೆ ಇಳಿಸಿ ದಳು. ದಾವೀದನು ತಪ್ಪಿಸಿಕೊಂಡು ಓಡಿಹೋದನು.
13ಮೀಕಲಳು ಮನೆಯಲ್ಲಿದ್ದ ವಿಗ್ರಹವನ್ನು ಹಾಸಿಗೆಯ ಮೇಲೆ ಇಟ್ಟು ಅದಕ್ಕೆ ಬಟ್ಟೆಗಳನ್ನು ತೊಡಿಸಿ ಅದರ ತಲೆಗೆ ಹೋತದ ಕೂದಲನ್ನೂ ಅಂಟಿಸಿದಳು.

14ಸೌಲನು ದಾವೀದನನ್ನು ಬಂಧಿಸಿ ಕರೆತರಲು ಸಂದೇಶಕರನ್ನು ಕಳುಹಿಸಿದನು. ಆದರೆ ಮೀಕಲಳು, ''ದಾವೀದನಿಗೆ ಹುಷಾರಿಲ್ಲ'' ಎಂದು ಹೇಳಿದಳು.

15ಸಂದೇಶಕರು ಹೋಗಿ ಸೌಲನಿಗೆ ವಿಷಯ ತಿಳಿಸಿ ದಾಗ ಅವನು ದಾವೀದನನ್ನು ನೋಡಲು ಮತ್ತೆ ಸಂದೇಶಕರನ್ನು ಕಳುಹಿಸಿದನು. ಸೌಲನು ಅವರಿಗೆ, ''ದಾವೀದನನ್ನು ನನ್ನ ಬಳಿಗೆ ಕರೆತನ್ನಿ! ಹಾಸಿಗೆಯ ಮೇಲೆ ಮಲಗಿರುವ ಅವನನ್ನು ಹಾಸಿಗೆಯ ಸಮೇತವಾಗಿ ತೆಗೆದು ಕೊಂಡು ಬನ್ನಿ! ನಾನು ಅವನನ್ನು ಕೊಲ್ಲುತ್ತೇನೆ'' ಎಂದು
ಹೇಳಿದನು. 16ಸಂದೇಶಕರು ದಾವೀದನ ಮನೆಗೆ
ಹೋದರು. ಅವರು ದಾವೀದನನ್ನು ಕರೆದೊಯ್ಯಲು ಒಳಗಡೆ ಹೋದಾಗ ಹಾಸಿಗೆಯ ಮೇಲಿರುವುದು ಕೇವಲ ವಿಗ್ರಹವೆಂಬುದೂ ಅದರ ಕೂದಲು ಕೇವಲ ಹೋತದ ಕೂದಲೆಂಬುದೂ ಅವರಿಗೆ ಗೊತ್ತಾಯಿತು.

17ಸೌಲನು ಮೀಕಲಳಿಗೆ, ''ನೀನು ಈ ರೀತಿ ನನಗೆ ಮೋಸ ಮಾಡಿದ್ದೇಕೆ? ನನ್ನ ಶತ್ರುವು ತಪ್ಪಿಸಿಕೊಳ್ಳಲು ನೀನು ಅವಕಾಶ ಮಾಡಿಕೊಟ್ಟೆ! ದಾವೀದನು ಓಡಿ ಹೋದನಲ್ಲಾ!'' ಎಂದು ಹೇಳಿದನು.

ಮೀಕಲಳು ಸೌಲನಿಗೆ, ''ತಪ್ಪಿಸಿಕೊಳ್ಳಲು ತನಗೆ ಸಹಾಯ ಮಾಡದಿದ್ದರೆ ನನ್ನನ್ನು ಕೊಲ್ಲುವುದಾಗಿ ದಾವೀದನು ತಿಳಿಸಿದ!'' ಎಂದು ಹೇಳಿದಳು.

### ರಾಮದ ಪಾಳೆಯದಲ್ಲಿ ದಾವೀದ

18ದಾವೀದನು ತಪ್ಪಿಸಿಕೊಂಡು ರಾಮುದಲ್ಲಿದ್ದ ಸಮುವೇಲನ ಹತ್ತಿರಕ್ಕೆ ಓಡಿಹೋದನು. ಸೌಲನು ತನಗೆ ಮಾಡಿದ್ದನ್ನೆಲ್ಲ ದಾವೀದನು ಸಮುವೇಲನಿಗೆ ಹೇಳಿದನು. ನಂತರ ದಾವೀದನು ಮತ್ತು ಸಮುವೇಲನು ಪ್ರವಾದಿ ಗಳಿದ್ದ ಪಾಳೆಯಕ್ಕೆ ಹೋದರು. ದಾವೀದನು ಅಲ್ಲಿ ನೆಲೆಸಿ
ದನು. 19ದಾವೀದನು ರಾಮದ ಪಾಳೆಯದಲ್ಲಿರುವ ಸಂಗ
ತಿಯು ಸೌಲನಿಗೆ ತಿಳಿದುಬಂದಿತು. 20ದಾವೀದನನ್ನು
ಬಂಧಿಸಿ ತರಲು ಸೌಲನು ಜನರನ್ನು ಕಳುಹಿಸಿದನು. ಆದರೆ ಆ ಜನರು ಪಾಳೆಯಕ್ಕೆ ಬರುವಷ್ಟರಲ್ಲಿ ಪ್ರವಾದಿ ಗಳು ಅಲ್ಲಿ ಪ್ರವಾದಿಸುತ್ತಿದ್ದರು. ಸಮುವೇಲನು ಅವರ ನಾಯಕನಾಗಿ ನಿಂತಿದ್ದನು. ದೇವರಾತ್ಮವು ಸಂದೇಶಕರ ಮೇಲೆ ಬಂದದ್ದರಿಂದ ಅವರೂ ಪ್ರವಾದಿಸ ಲಾರಂಭಿಸಿದರು.

21ಸೌಲನು ಈ ಸುದ್ದಿಯನ್ನು ಕೇಳಿ ಇತರ ಸಂದೇಶಕ ರನ್ನು ಕಳುಹಿಸಿದನು. ಆದರೆ ಅವರೂ ಪ್ರವಾದಿಸ ಲಾರಂಭಿಸಿದರು. ಆದುದರಿಂದ ಸೌಲನು ಮೂರನೆಯ ಬಾರಿ ಸಂದೇಶಕರನ್ನು ಕಳುಹಿಸಿದನು ಅವರೂ
ಪ್ರವಾದಿಸಲಾರಂಭಿಸಿದರು. 22ಕಡೆಯದಾಗಿ ಸೌಲನೇ
ರಾಮಕ್ಕೆ ಹೋದನು. ಸೇಕೂವಿನಲ್ಲಿ ಕಣದ ಬಳಿ ಇರುವ ದೊಡ್ಡ ಬಾವಿಯ ಸಮೀಪಕ್ಕೆ ಅವನು ಬಂದು,

‘‘ಸಮುವೇಲ ಮತ್ತು ದಾವೀದ ಎಲ್ಲಿದ್ದಾರೆ?’’ ಎಂದು
ಕೇಳಿದನು.
ಜನರು, ‘‘ರಾಮದ ಹತ್ತಿರವಿರುವ ಪಾಳೆಯ
ದಲ್ಲಿದ್ದಾರೆ’’ ಎಂದು ಉತ್ತರಕೊಟ್ಟರು.
23ನಂತರ ಸೌಲನು ರಾಮದ ಹತ್ತಿರವಿರುವ ಪಾಳೆಯಕ್ಕೆ
ಹೋದನು. ದೇವರಾತ್ಮವು ಸೌಲನ ಮೈಮೇಲೂ
ಬಂದಿತು. ಅವನೂ ಪ್ರವಾದಿಸಲಾರಂಭಿಸಿದನು. ಸೌಲನು
ರಾಮದ ಪಾಳೆಯದವರೆಗೂ ಪ್ರವಾದಿಸುತ್ತಾ ಹೋದನು.
24ನಂತರ ಸೌಲನು ತಾನು ಧರಿಸಿದ್ದ ಬಟ್ಟೆಗಳನ್ನು
ತೆಗೆದುಹಾಕಿದನು. ಸಮುವೇಲನ ಎದುರಿನಲ್ಲಿ ಸೌಲನೂ
ಸಹ ಪ್ರವಾದಿಸುತ್ತಿದ್ದನು. ಅಂದು ಹಗಲುರಾತ್ರಿಯೆಲ್ಲ
ಸೌಲನು ಬೆತ್ತಲೆಯಾಗಿ ಅಲ್ಲಿಯೇ ಮಲಗಿದ್ದನು.
ಆದುದರಿಂದಲೇ ಜನರು, ‘‘ಸೌಲನೂ ಪ್ರವಾದಿಗಳಲ್ಲಿ
ಒಬ್ಬನೇ?’’ ಎಂದು ಹೇಳುತ್ತಾರೆ.

### ದಾವೀದ ಮತ್ತು ಯೋನಾತಾನರ ಒಪ್ಪಂದ

20 ದಾವೀದನು ರಾಮದ ಪಾಳೆಯದಿಂದ ಓಡಿ
ಹೋದನು. ದಾವೀದನು ಯೋನಾತಾನನ
ಬಳಿಗೆ ಹೋಗಿ, ‘‘ನಾನು ಮಾಡಿರುವ ತಪ್ಪೇನು? ನನ್ನ
ಅಪರಾಧವೇನು? ನಿನ್ನ ತಂದೆಯು ನನ್ನನ್ನು ಕೊಲ್ಲಲು
ಪ್ರಯತ್ನಿಸುತ್ತಿರುವುದೇಕೆ?’’ ಎಂದು ಕೇಳಿದನು.
2ಯೋನಾತಾನನು, ‘‘ಎಂದಿಗೂ ಇಲ್ಲ ನನ್ನ ತಂದೆಯು
ನಿನ್ನನ್ನು ಕೊಲ್ಲಲು ಪ್ರಯತ್ನಿಸುತ್ತಿಲ್ಲ! ನನ್ನ ತಂದೆಯು
ನನಗೆ ತಿಳಿಸದೆ ಏನನ್ನೂ ಮಾಡುವುದಿಲ್ಲ. ಅದು ಬಹು
ಮುಖ್ಯವಾದದ್ದೇ ಆಗಿರಲಿ ಇಲ್ಲವೆ ಮುಖ್ಯವಾಗಿಲ್ಲದ್ದೇ
ಆಗಿರಲಿ, ನನ್ನ ತಂದೆಯು ನನಗೆ ತಿಳಿಸೇ ತಿಳಿಸುತ್ತಾನೆ.
ನನ್ನ ತಂದೆಯು ನಿನ್ನನ್ನು ಕೊಲ್ಲಬೇಕೆಂದಿದ್ದರೆ ನಾನು
ನಿನಗೆ ತಿಳಿಸುತ್ತಿರಲಿಲ್ಲವೇ’’ಎಂದು ಹೇಳಿದನು.
3ಆದರೆ ದಾವೀದನು, ‘‘ನಾನು ನಿನ್ನ ಗೆಳೆಯನೆಂಬುದು
ನಿನ್ನ ತಂದೆಗೆ ಚೆನ್ನಾಗಿ ತಿಳಿದಿದೆ. ನಿನ್ನ ತಂದೆಯು,
‘ಯೋನಾತಾನನಿಗೆ ಇದು ತಿಳಿಯಲೇಬಾರದು. ಅವನಿಗೆ
ತಿಳಿದುಬಿಟ್ಟರೆ ಅವನು ದಾವೀದನಿಗೆ ಹೇಳಿಬಿಡುತ್ತಾನೆ’
ಎಂದುಕೊಂಡಿದ್ದಾನೆ. ಯೆಹೋವನಾಣೆ ನಿನ್ನ ಜೀವ
ದಾಣೆ, ನಾನು ಸಾವಿಗೆ ಬಹು ಹತ್ತಿರವಾಗಿದ್ದೇನೆ’’ಎಂದು
ಹೇಳಿದನು.
4ಯೋನಾತಾನನು, ‘‘ನೀನು ಬಯಸುವ ಏನ
ನ್ನಾದರೂ ಮಾಡಲು ನಾನು ಸಿದ್ಧನಿದ್ದೇನೆ’’ ಎಂದು
ದಾವೀದನಿಗೆ ಹೇಳಿದನು.
5ಆಗ ದಾವೀದನು, ‘‘ನಾಳೆ ಅಮಾವಾಸ್ಯೆಯ ಸಮಾ
ರಂಭ* ನಾನು ರಾಜನ ಜೊತೆಯಲ್ಲಿ ಊಟಮಾಡ
ಬೇಕಾಗಿದೆ. ಆದರೆ ನಾನು ಸಂಜೆಯವರೆಗೆ ಹೊಲದಲ್ಲಿ
ಅಡಗಿಕೊಳ್ಳಲು ಅವಕಾಶ ಮಾಡಿಕೊಡು. 6ನಾನು
ಇಲ್ಲದಿರುವುದನ್ನು ನಿಮ್ಮ ತಂದೆಯು ಗಮನಿಸಿದರೆ
ಅವನಿಗೆ, ‘ದಾವೀದನು ಬೇತ್ಲೆಹೇಮಿನ ತನ್ನ ಮನೆಗೆ
ಹೋಗಲು ಬಯಸಿದನು. ಅವನ ಕುಟುಂಬದವರು ಅಲ್ಲಿ
ಮಾಸಿಕಯಜ್ಞದ ಔತಣವನ್ನು ಏರ್ಪಡಿಸಿದ್ದಾರೆ. ಬೇತ್ಲೆ
ಹೇಮಿಗೆ ಹೋಗಿ ತನ್ನ ಕುಟುಂಬದವರ ಜೊತೆಯಿರಲು
ಅವಕಾಶಕೊಡಬೇಕೆಂದು ದಾವೀದನು ನನ್ನನ್ನು ಕೇಳಿ
ಕೊಂಡನು’ ಎಂದು ಹೇಳು. 7ನಿನ್ನ ತಂದೆಯು, ‘ಒಳ್ಳೆಯ
ದಾಯಿತು’ ಎಂದರೆ ನಾನು ಬದುಕಿದೆ. ಆದರೆ ನಿನ್ನ
ತಂದೆಯು ಕೋಪಗೊಂಡರೆ ಅವನು ನನಗೆ ಕೇಡು
ಮಾಡಲು ಬಯಸಿದ್ದಾನೆಂದು ತಿಳಿದುಕೋ. 8ಯೋನಾ
ತಾನನೇ, ನನ್ನ ಮೇಲೆ ದಯೆಯಿರಲಿ. ನಾನು ನಿನ್ನ ಸೇವಕ.
ನೀನು ಯೆಹೋವನ ಮುಂದೆ ನನ್ನೊಂದಿಗೆ ಒಡಂಬಡಿಕೆ
ಮಾಡಿಕೊಂಡಿರುವೆ. ನಾನು ತಪ್ಪಿತಸ್ಥನಾಗಿದ್ದರೆ, ನೀನೇ
ನನ್ನನ್ನು ಕೊಂದುಬಿಡು! ಆದರೆ ನಿನ್ನ ತಂದೆಯ ಹತ್ತಿರಕ್ಕೆ
ನನ್ನನ್ನು ಕರೆದೊಯ್ಯಬೇಡ’’ಎಂದು ಹೇಳಿದನು.
9ಯೋನಾತಾನನು, ‘‘ಇಲ್ಲ, ಎಂದೆಂದಿಗೂ ಇಲ್ಲ! ನನ್ನ
ತಂದೆಯು ನಿನಗೆ ಕೇಡು ಮಾಡುವುದಕ್ಕಾಗಿ ಉಪಾಯ
ಮಾಡುತ್ತಿರುವುದು ನನಗೆ ತಿಳಿದುಬಂದರೆ ನಾನು ನಿನ್ನನ್ನು
ಎಚ್ಚರಿಸುತ್ತೇನೆ’’ ಎಂದು ಉತ್ತರಿಸಿದನು.
10ದಾವೀದನು, ‘‘ನಿನ್ನ ತಂದೆಯು ನಿನಗೆ ಕೆಟ್ಟ ಸಂಗತಿ
ಗಳನ್ನು ಹೇಳಿದರೆ, ನನ್ನನ್ನು ಎಚ್ಚರಿಸುವವರು ಯಾರು?’’
ಎಂದು ಕೇಳಿದನು.
11ಆಗ ಯೋನಾತಾನನು, ‘‘ನಾವು ಹೊಲದೊಳಕ್ಕೆ
ಹೋಗೋಣ ಬಾ’’ಎಂದು ಹೇಳಿದನು. ಅಂತೆಯೇ
ಯೋನಾತಾನನು ಮತ್ತು ದಾವೀದನು ಒಟ್ಟಾಗಿ
ಹೊಲದೊಳಕ್ಕೆ ಹೋದರು.
12ಯೋನಾತಾನನು ದಾವೀದನಿಗೆ, ‘‘ನಾನು ಇಸ್ರೇಲರ
ದೇವರಾದ ಯೆಹೋವನ ಎದುರಿನಲ್ಲಿ ಈ ಪ್ರಮಾಣ
ವನ್ನು ಮಾಡುತ್ತೇನೆ. ನಮ್ಮ ತಂದೆಯು ನಿನ್ನ ಬಗ್ಗೆ ಒಳ್ಳೆಯ
ಭಾವನೆಯನ್ನು ಹೊಂದಿರುವನೊ ಇಲ್ಲವೊ ಎಂಬುದನ್ನು
ತಿಳಿದುಕೊಳ್ಳುತ್ತೇನೆ. ನಂತರ ಸಂದೇಶವೊಂದನ್ನು ನಾನು
ಮೂರು ದಿನಗಳೊಳಗಾಗಿ ನಿನಗೆ ಕಳುಹಿಸಿಕೊಡುತ್ತೇನೆ.
13ನಮ್ಮ ತಂದೆಯು ನಿನಗೆ ಕೇಡು ಮಾಡಬೇಕೆಂದಿದ್ದರೆ,
ಅದನ್ನು ನಾನು ನಿನಗೆ ತಿಳಿಸಿ, ನೀನು ಸುರಕ್ಷಿತವಾಗಿರಲು
ಅವಕಾಶ ಮಾಡಿಕೊಡುತ್ತೇನೆ. ಈ ಕಾರ್ಯವನ್ನು ನಾನು
ಮಾಡದೆ ಹೋದರೆ ಯೆಹೋವನು ನನ್ನನ್ನು ದಂಡಿಸಲಿ.
ಯೆಹೋವನು ನಮ್ಮ ತಂದೆಯ ಜೊತೆಯಲ್ಲಿದ್ದಂತೆ ನಿನ್ನ
ಜೊತೆಯೂ ಇರಲಿ . 14ನನ್ನ ಜೀವಮಾನವೆಲ್ಲಾ ನೀನು
ನನಗೆ ದಯಾಳುವಾಗಿರು. 15ನನ್ನ ಕುಟುಂಬದ ಮೇಲೆ
ಶಾಶ್ವತವಾಗಿ ನಿನ್ನ ದಯೆಯಿರಲಿ. ಭೂಮಿಯ ಮೇಲಿ
ರುವ ನಿನ್ನ ಶತ್ರುಗಳೆಲ್ಲರನ್ನೂ ಯೆಹೋವನು

---

**ಅಮಾವಾಸ್ಯೆಯ ಸಮಾರಂಭ** ಯೆಹೂದ್ಯರ ತಿಂಗಳ ಮೊದಲನೆ ದಿನ. ಈ ದಿನವು ವಿಶ್ರಾಂತಿಗೆ ಮತ್ತು ಆರಾಧನೆಗೆ ವಿಶೇಷವಾದ ದಿನ.

ನಾಶಪಡಿಸುತ್ತಾನೆ. 16ಒಂದು ವೇಳೆ ಆ ಸಮಯದಲ್ಲಿ
ಯೋನಾತಾನನ ಕುಟುಂಬವು ದಾವೀದನಿಂದ ಅಗಲಿ
ಹೋಗಬೇಕಿದ್ದರೆ ಅಗಲಿಹೋಗಲಿ. ದಾವೀದನ
ಶತ್ರುಗಳನ್ನು ಯೆಹೋವನು ದಂಡಿಸಲಿ'' ಎಂದು
ಹೇಳಿದನು.

17ಯೋನಾತಾನನು ದಾವೀದನಿಂದ ತನ್ನ ಪ್ರೀತಿಯ
ವಾಗ್ದಾನವನ್ನು ಮತ್ತೆ ಹೇಳಿಸಿದನು. ಯೋನಾತಾನನು
ತನ್ನನ್ನು ತಾನು ಪ್ರೀತಿಸುತ್ತಿದ್ದಷ್ಟೆ ದಾವೀದನನ್ನೂ ಪ್ರೀತಿಸು
ತ್ತಿದ್ದುದ್ದೇ ಅದಕ್ಕೆ ಕಾರಣ.

18ಯೋನಾತಾನನು ದಾವೀದನಿಗೆ, ''ನಾಳೆ ಅಮಾ
ವಾಸ್ಯೆಯ ಔತಣ. ನಿನ್ನ ಸ್ಥಳವು ಖಾಲಿಯಾಗಿರುವುದನ್ನು
ನನ್ನ ತಂದೆಯು ಕಂಡು, ನೀನು ಹೊರಟುಹೋಗಿರುವೆ
ಎಂದು ತಿಳಿದುಕೊಳ್ಳುವನು. 19ಈ ತೊಂದರೆಯು
ಆರಂಭವಾದಾಗ ಎಲ್ಲಿ ಅಡಗಿದ್ದೆಯೋ ಅದೇ ಸ್ಥಳಕ್ಕೆ
ಮೂರನೆಯ ದಿನ ಹೋಗು. ಆ ಬೆಟ್ಟದ ಸಮೀಪದಲ್ಲಿ
ಕಾಯುತ್ತಿರು. 20ಮೂರನೆಯ ದಿನ, ನಾನು ಆ ಬೆಟ್ಟಕ್ಕೆ
ಹೋಗುತ್ತೇನೆ ಮತ್ತು ಗುರಿಯಿಟ್ಟು ಹೊಡೆಯುವವನಂತೆ
ಕೆಲವು ಬಾಣಗಳನ್ನು ಹೊಡೆಯುತ್ತೇನೆ. 21ನಂತರ ಆ
ಬಾಣಗಳನ್ನು ಹುಡುಕಿಕೊಂಡು ಬರಲು ಹುಡುಗನನ್ನು
ಕಳುಹಿಸುತ್ತೇನೆ. ಎಲ್ಲವೂ ಒಳಿತಾಗಿದ್ದರೆ ನಾನು ಆ
ಹುಡುಗನಿಗೆ, 'ನೀನು ಬಹು ದೂರ ಹೋಗಿರುವೆ!
ಬಾಣಗಳು ನನ್ನ ಹತ್ತಿರದಲ್ಲೇ ಇವೆ. ಹಿಂತಿರುಗಿಬಂದು
ಅವುಗಳನ್ನು ತೆಗೆದುಕೋ' ಎಂದು ಹೇಳುತ್ತೇನೆ. ನಾನು
ಆ ರೀತಿ ಹೇಳಿದರೆ, ನೀನು ಅಡಗಿದ್ದ ಸ್ಥಳದಿಂದ ಹೊರಗೆ
ಬಾ. ಯೆಹೋವನಾಣೆ, ನೀನು ಸುರಕ್ಷಿತನಾಗಿರುವೆ.
ನಿನಗೆ ಯಾವ ಅಪಾಯವೂ ಇಲ್ಲ. 22ಆದರೆ ಅಲ್ಲಿ
ತೊಂದರೆಯಿರುವುದಾದರೆ, ನಾನು ಆ ಹುಡುಗನಿಗೆ,
'ಬಾಣಗಳು ಬಹಳ ದೂರದಲ್ಲಿವೆ. ಹೋಗಿ ಅವುಗಳನ್ನು
ತೆಗೆದುಕೊಂಡು ಬಾ ಎಂದು ಹೇಳುವೆ. ನಾನು ಆ ರೀತಿ
ಹೇಳಿದರೆ, ನೀನು ಅಲ್ಲಿಂದ ಹೊರಟುಹೋಗು.
ಯೆಹೋವನೇ ನಿನ್ನನ್ನು ದೂರ ಕಳುಹಿಸುತ್ತಿದ್ದಾನೆ. 23ನಿನ್ನ
ಮತ್ತು ನನ್ನ ಮಧ್ಯೆ ನಡೆದ ಈ ಒಪ್ಪಂದವನ್ನು ಜ್ಞಾಪಿಸಿಕೊ.
ಯೆಹೋವನು ಸದಾಕಾಲ ನಮಗೆ ಸಾಕ್ಷಿಯಾಗಿರುವನು''
ಎಂದು ಹೇಳಿದನು.

24ನಂತರ ದಾವೀದನು ಹೊಲದಲ್ಲಿ ಅಡಗಿಕೊಂಡನು.

### ಔತಣದಲ್ಲಿ ಸೌಲನ ವರ್ತನೆ

ಅಮಾವಾಸ್ಯೆಯ ಔತಣದ ಸಮಯವು ಬಂದಿತು.
ರಾಜನು ಊಟಕ್ಕೆ ಕುಳಿತನು. 25ರಾಜನು ತಾನು ಯಾವಾ
ಗಲೂ ಕುಳಿತುಕೊಳ್ಳುವಂತೆ ಗೋಡೆಯ ಸಮೀಪದಲ್ಲಿ
ಕುಳಿತುಕೊಂಡನು. ಯೋನಾತಾನನು ಸೌಲನ ಎದು
ರಾಗಿ ಕುಳಿತುಕೊಂಡನು. ಸೌಲನ ಪಕ್ಕದಲ್ಲಿ ಅಬ್ನೇರನು
ಕುಳಿತುಕೊಂಡನು. ಆದರೆ ದಾವೀದನ ಸ್ಥಳವು ಖಾಲಿ
ಯಾಗಿತ್ತು. 26ಸೌಲನು ಆ ದಿನ ಏನನ್ನೂ ಹೇಳದೆ,
''ದಾವೀದನಿಗೆ ಏನೋ ಸಂಭವಿಸಿರಬಹುದು ಆದ್ದರಿಂದ
ಅವನು ಇಂದು ಶುದ್ಧನಾಗಿರಲಿಕ್ಕಿಲ್ಲ'' ಎಂದು ಯೋಚಿಸಿ
ದನು. 27ಮಾರನೆಯ ದಿನದಲ್ಲಿ, ಅಂದರೆ ಆ ತಿಂಗಳ
ಎರಡನೆಯ ದಿನದಲ್ಲಿ ದಾವೀದನ ಸ್ಥಳವು ಮತ್ತೆ ಖಾಲಿ
ಯಾಗಿತ್ತು. ಆಗ ಸೌಲನು ತನ್ನ ಮಗನಾದ ಯೋನಾತಾ
ನನಿಗೆ, ''ನಿನ್ನೆ ಮತ್ತು ಇಂದು ಅಮಾವಾಸ್ಯೆ ಔತಣಕ್ಕೆ
ಇಷಯನ ಮಗನಾದ ದಾವೀದನು ಏಕೆ ಬರಲಿಲ್ಲ?''
ಎಂದು ಕೇಳಿದನು.

28ಯೋನಾತಾನನು, ''ಬೇತ್ಲೆಹೇಮಿಗೆ ಹೋಗಲು
ತನಗೆ ಅವಕಾಶಕೊಡಬೇಕೆಂದು ದಾವೀದನು ನನ್ನನ್ನು
ಬಹಳವಾಗಿ ಕೇಳಿಕೊಂಡನು. 29'ನಮ್ಮ ಗೋತ್ರದವರು
ಬೇತ್ಲೆಹೇಮಿನಲ್ಲಿ ಯಜ್ಞವನ್ನು ಅರ್ಪಿಸುತ್ತಿರುವುದರಿಂದ
ನನ್ನ ಸಹೋದರರು ನನಗೂ ಬರಬೇಕೆಂದು
ಕೇಳಿಕೊಂಡಿದ್ದಾರೆ. ನೀನು ನನ್ನ ಗೆಳೆಯನಾಗಿರುವು
ದಾದರೆ ನನ್ನ ಸೋದರರರನ್ನು ನೋಡಿಕೊಂಡು ಬರಲು
ದಯವಿಟ್ಟು ನನಗೆ ಅವಕಾಶ ಕೊಡು ಎಂದು ಹೇಳಿದನು.'
ಆದ್ದರಿಂದಲೇ ದಾವೀದನು ರಾಜನ ಊಟದ ಮೇಜಿಗೆ
ಬಂದಿಲ್ಲ''ಎಂದು ಉತ್ತರಿಸಿದನು.

30ಸೌಲನು ಯೋನಾತಾನನ ಮೇಲೆ ಬಹಳ ಕೋಪ
ಗೊಂಡು, ''ನೀನು ಅವಿಧೇಯಳಾದ ದಾಸಿಯ ಮಗ.
ನೀನೂ ಅವಳಂತೆಯೇ ಅವಿಧೇಯ. ನೀನು ದಾವೀದನ
ಪಕ್ಷವಹಿಸಿರುವುದು ನನಗೆ ಗೊತ್ತಿದೆ. ನೀನು ನಿನಗೂ
ಮತ್ತು ನಿನ್ನ ತಾಯಿಗೂ ನಾಚಿಕೆಯನ್ನು ತಂದಿರುವೆ.
31ಇಷಯನ ಮಗ ಬದುಕಿರುವವರೆಗೆ ನೀನು ರಾಜ
ನಾಗುವುದೇ ಇಲ್ಲ; ನಿನಗೆ ರಾಜ್ಯಾಧಿಕಾರವೂ ಸಿಗುವು
ದಿಲ್ಲ. ಈಗ ದಾವೀದನನ್ನು ಕರೆದುಕೊಂಡು ಬಾ!
ಅವನೊಬ್ಬ ಸತ್ತಮನುಷ್ಯ!'' ಎಂದು ಹೇಳಿದನು.

32ಯೋನಾತಾನನು ತನ್ನ ತಂದೆಗೆ, ''ದಾವೀದನನ್ನು
ಏಕೆ ಕೊಲ್ಲಬೇಕು? ಅವನು ಮಾಡಿದ ತಪ್ಪಾದರೂ
ಏನು?'' ಎಂದು ಕೇಳಿದನು.

33ಆದರೆ ಸೌಲನು ಯೋನಾತಾನನನ್ನು ಕೊಲ್ಲುವುದ
ಕ್ಕಾಗಿ ಈಟಿಯನ್ನು ಅವನ ಕಡೆಗೆ ಎಸೆದನು. ದಾವೀದ
ನನ್ನು ಕೊಲ್ಲಲು ತನ್ನ ತಂದೆಯು ದೃಢನಿರ್ಧಾರ ಮಾಡಿ
ದ್ದಾನೆಂದು ಯೋನಾತಾನನು ತಿಳಿದುಕೊಂಡನು.
34ಯೋನಾತಾನನು ಬಹಳ ಕೋಪಗೊಂಡು ಊಟದ
ಮೇಜನ್ನು ಬಿಟ್ಟುಹೋದನು. ಯೋನಾತಾನನು ತನ್ನ
ತಂದೆಯ ಮೇಲೆ ಬಹಳವಾಗಿ ಬೇಸರಗೊಂಡಿದ್ದರಿಂದ
ಮತ್ತು ಕೋಪವುಳ್ಳವನಾಗಿದ್ದರಿಂದ ಎರಡನೆ ದಿನ ಔತಣ
ದಲ್ಲಿ ಅವನು ಏನನ್ನೂ ತಿನ್ನಲಿಲ್ಲ. ಸೌಲನು ದಾವೀದನಿಗೆ
ಅವಮಾನ ಮಾಡಿದ್ದರಿಂದ ಯೋನಾತಾನನು ಕೋಪ
ಗೊಂಡಿದ್ದನು. ಸೌಲನು ದಾವೀದನನ್ನು ಕೊಲ್ಲಬೇಕೆಂದಿ
ದ್ದುದರಿಂದ ಯೋನಾತಾನನು ದುಃಖಿಸಿದನು.

### ದಾವೀದ ಮತ್ತು ಯೋನಾತಾನರ ಬೀಳ್ಕೊಡುಗೆ

[35]ಮಾರನೆಯ ದಿನ ಬೆಳಿಗ್ಗೆ ಯೋನಾತಾನನು ಹೊಲಕ್ಕೆ ಹೋದನು. ಅವನು ದಾವೀದನೊಂದಿಗೆ ಮಾಡಿಕೊಂಡಿದ್ದ ಒಪ್ಪಂದದಂತೆ ಅವನನ್ನು ನೋಡಲು ಹೋದನು. ಯೋನಾತಾನನು ಒಬ್ಬ ಬಾಲಕನನ್ನು ತನ್ನೊಂದಿಗೆ ಕರೆದುಕೊಂಡು ಹೋದನು.
[36]ಯೋನಾತಾನನು ಆ ಬಾಲಕನಿಗೆ, ''ನಾನು ಪ್ರಯೋಗಿಸುವ ಬಾಣಗಳನ್ನು ಹುಡುಕಲು ಹೋಗು'' ಎಂದು ಹೇಳಿದನು. ಬಾಲಕನು ಓಡಲು ಆರಂಭಿಸಿದನು, ಯೋನಾತಾನನು ಆ ಹುಡುಗನ ಆಚೆಗೆ ಬಾಣಗಳನ್ನು ಪ್ರಯೋಗಿಸಿದನು.
[37]ಬಾಣಗಳು ಹೋಗಿ ಬಿದ್ದ ಸ್ಥಳಕ್ಕೆ ಬಾಲಕನು ಹೋದನು. ಆದರೆ ಯೋನಾತಾನನು, ''ಬಾಣಗಳು ಬಹಳ ದೂರದಲ್ಲಿವೆ!'' ಎಂದು ಹೇಳಿದನು.
[38]ನಂತರ ಯೋನಾತಾನನು, ''ಬೇಗ ಹೋಗು! ಅವುಗಳನ್ನು ತೆಗೆದುಕೊಂಡು ಬಾ! ಅಲ್ಲಿಯೇ ನಿಲ್ಲಬೇಡ!'' ಎಂದು ಕೂಗಿಹೇಳಿದನು. ಆ ಬಾಲಕನು ಬಾಣಗಳನ್ನೆಲ್ಲ ಆರಿಸಿಕೊಂಡು ತನ್ನ ಒಡೆಯನ ಬಳಿಗೆ ತಂದನು.
[39]ಅಲ್ಲಿ ಏನು ನಡೆಯಿತು ಎಂಬುದು ಬಾಲಕನಿಗೇನೂ ತಿಳಿಯಲಿಲ್ಲ. ಯೋನಾತಾನ ಮತ್ತು ದಾವೀದರಿಗೆ ಮಾತ್ರ ತಿಳಿದಿತ್ತು.
[40]ಯೋನಾತಾನನು ತನ್ನ ಬಿಲ್ಲು ಮತ್ತು ಬಾಣಗಳನ್ನು ಬಾಲಕನಿಗೆ ಕೊಟ್ಟನು. ನಂತರ ಯೋನಾತಾನನು ಆ ಬಾಲಕನಿಗೆ, ''ಪಟ್ಟಣಕ್ಕೆ ಹಿಂದಿರುಗಿ ಹೋಗು'' ಎಂದು ಹೇಳಿದನು.

[41]ಬಾಲಕನು ಹೊರಟುಹೋದನು. ದಾವೀದನು ತಾನು ಅಡಗಿದ್ದ ಬೆಟ್ಟದ ಮತ್ತೊಂದು ಕಡೆಯ ಸ್ಥಳದಿಂದ ಹೊರಬಂದನು. ದಾವೀದನು ಯೋನಾತಾನನ ಮುಂದೆ ಬಂದು ಮೂರು ಸಲ ತನ್ನ ಮುಖವನ್ನು ನೆಲದವರೆಗೂ ಬಗ್ಗಿಸಿ ನಮಸ್ಕರಿಸಿದನು. ನಂತರ ದಾವೀದ ಮತ್ತು ಯೋನಾತಾನರು ಪರಸ್ಪರ ಮುದ್ದಿಟ್ಟರು, ಅವರಿಬ್ಬರೂ ಒಟ್ಟಾಗಿ ಅತ್ತರು. ದಾವೀದನು ಯೋನಾತಾನನಿಗಿಂತ ಹೆಚ್ಚು ಅತ್ತನು.
[42]ಯೋನಾತಾನನು ದಾವೀದನಿಗೆ. ''ಸಮಾಧಾನದಿಂದ ಹೋಗು. ನಾವಿಬ್ಬರೂ ಗೆಳೆಯರಾಗಿರಲು ಯೆಹೋವನ ಹೆಸರಿನಲ್ಲಿ ಪ್ರಮಾಣಮಾಡಿದ್ದೇವೆ. ನಮ್ಮಿಬ್ಬರಿಗೂ ನಮ್ಮ ಸಂತತಿಯವರಿಗೆ ಇರುವ ಸಂಬಂಧಕ್ಕೆ ಯೆಹೋವನೇ ಸಾಕ್ಷಿ ಎಂದು ಹೇಳಿದ್ದೇವೆ''ಎಂದನು.

### ದಾವೀದನು ಯಾಜಕನಾದ ಅಹೀಮೆಲೆಕನನ್ನು ನೋಡಲು ಹೋದನು

21 ನಂತರ ದಾವೀದನು ಹೊರಟುಹೋದನು. ಯೋನಾತಾನನು ಪಟ್ಟಣಕ್ಕೆ ಹಿಂದಿರುಗಿದನು.
[2]ದಾವೀದನು ನೋಬ್ ಎಂಬ ಪಟ್ಟಣದ ಯಾಜಕನಾದ ಅಹೀಮೆಲೆಕನನ್ನು ನೋಡಲು ಹೋದನು.

ಅಹೀಮೆಲೆಕನು ದಾವೀದನನ್ನು ಸಂಧಿಸಲು ಹೊರಗೆ ಬಂದನು. ಅಹೀಮೆಲೆಕನು ಭಯದಿಂದ ನಡುಗುತ್ತಿದ್ದನು. ಅಹೀಮೆಲೆಕನು ದಾವೀದನಿಗೆ, ''ನೀನು ಒಬ್ಬಂಟಿಗನಾಗಿ ಬಂದಿರುವುದೇಕೆ? ಬೇರೆ ಯಾವ ವ್ಯಕ್ತಿಯೂ ನಿನ್ನ ಜೊತೆಯಲ್ಲಿಲ್ಲದಿರುವುದೇಕೆ?'' ಎಂದು ಕೇಳಿದನು.

[3]ದಾವೀದನು ಅಹೀಮೆಲೆಕನಿಗೆ, ''ರಾಜನು ನನಗೆ ಒಂದು ವಿಶೇಷ ಆಜ್ಞೆಯನ್ನು ಕೊಟ್ಟಿರುವನು. ಅವನು ನನಗೆ, 'ಈ ಕೆಲಸದ ಬಗ್ಗೆ ಬೇರೆ ಯಾರಿಗೂ ತಿಳಿಸಬೇಡ. ನಾನು ನಿನಗೆ ಮಾಡಲು ಹೇಳಿದ ಕೆಲಸವು ಯಾರಿಗೂ ತಿಳಿಯಕೂಡದು' ಎಂದು ಹೇಳಿದ್ದಾನೆ. ನಾನು ನನ್ನ ಜನರಿಗೆ ನನ್ನನ್ನು ಎಲ್ಲಿ ಭೇಟಿ ಯಾಗಬೇಕೆಂದು ತಿಳಿಸಿದ್ದೇನೆ.
[4]ಈಗ, ನಿನ್ನ ಬಳಿ ತಿನ್ನಲು ಏನಾದರೂ ಆಹಾರವಿದೆಯೋ? ನನಗೆ ಐದು ರೊಟ್ಟಿಗಳನ್ನಾಗಲೀ ಅಥವಾ ಬೇರೆ ಯಾವ ಆಹಾರ ಪದಾರ್ಥವನ್ನಾಗಲೀ ಕೊಡು'' ಎಂದು ಹೇಳಿದನು.

[5]ಯಾಜಕನು ದಾವೀದನಿಗೆ, ''ನನ್ನ ಬಳಿ ಸಾಧಾರಣವಾದ ರೊಟ್ಟಿಗಳಿಲ್ಲ. ಆದರೆ ಕೆಲವು ಪವಿತ್ರ ರೊಟ್ಟಿಗಳಿವೆ. ನಿನ್ನ ಸೈನಿಕರು ಯಾವ ಹೆಂಗಸಿನೊಡನೆಯೂ ಲೈಂಗಿಕ ಸಂಬಂಧ ಮಾಡಿಲ್ಲದಿದ್ದರೆ ಅವರು ಅವುಗಳನ್ನು ತಿನ್ನಬಹುದು'' ಎಂದನು.

[6]ದಾವೀದನು ಯಾಜಕನಿಗೆ, ''ನಾವು ಯಾವ ಹೆಂಗಸಿನೊಂದಿಗೂ ಲೈಂಗಿಕ ಸಂಬಂಧ ಹೊಂದಿಲ್ಲ. ನನ್ನ ಜನರು ಯುದ್ಧಕ್ಕೆ ಹೋಗುವಾಗಲೂ ಸಾಧಾರಣಕಾರ್ಯಕ್ಕೆ ಹೋಗುವಾಗಲೂ ತಮ್ಮ ದೇಹಗಳನ್ನು ಶುಚಿಯಾಗಿಟ್ಟುಕೊಳ್ಳುತ್ತಾರೆ. ನಮ್ಮ ಇಂದಿನ ಕಾರ್ಯವು ವಿಶೇಷವಾದ್ದರಿಂದ ನಾವು ಖಂಡಿತವಾಗಿ ಪವಿತ್ರರಾಗಿದ್ದೇವೆ'' ಎಂದು ಹೇಳಿದನು.

[7]ಅಲ್ಲಿ ಪವಿತ್ರ ರೊಟ್ಟಿಯ ಹೊರತು ಬೇರೆ ರೊಟ್ಟಿಯು ಇರಲಿಲ್ಲ. ಆದುದರಿಂದ ಯಾಜಕನು ಆ ರೊಟ್ಟಿಯನ್ನು ದಾವೀದನಿಗೆ ಕೊಟ್ಟನು. ಯಾಜಕರು ಯೆಹೋವನ ಸನ್ನಿಧಿಯಲ್ಲಿ ಪವಿತ್ರ ಮೇಜಿನ ಮೇಲಿಟ್ಟಿದ್ದ ರೊಟ್ಟಿಯೇ ಅದಾಗಿತ್ತು. ಈ ರೊಟ್ಟಿಯನ್ನು ಪ್ರತಿದಿನವೂ ಹೊರತೆಗೆಯುತ್ತಿದ್ದರು ಮತ್ತು ಹೊಸ ರೊಟ್ಟಿಯನ್ನು ಆ ಸ್ಥಳದಲ್ಲಿ ಇಡುತ್ತಿದ್ದರು.

[8]ಸೌಲನ ಅಧಿಕಾರಿಗಳಲ್ಲಿ ಒಬ್ಬನು ಆ ದಿನ ಅಲ್ಲಿದ್ದನು. ಅವನು ದೋಯೇಗನೆಂಬ ಎದೋಮ್ಯನು. ದೋಯೇಗನನ್ನು ಯೆಹೋವನ ಸನ್ನಿಧಿಯಲ್ಲಿ ಇಟ್ಟಿದ್ದರು. ಸೌಲನ ಕುರಿಗಳನ್ನು ಕಾಯುವವರಿಗೆ ದೋಯೇಗನು ನಾಯಕನಾಗಿದ್ದನು.

[9]ದಾವೀದನು ಅಹೀಮೆಲೆಕನಿಗೆ, ''ನಿನ್ನ ಹತ್ತಿರ ಖಡ್ಗವಾಗಲಿ, ಭರ್ಜಿಯಾಗಲಿ ಇದೆಯೇ? ರಾಜನ ಕಾರ್ಯಭಾರವು ಬಹು ಮುಖ್ಯವಾದುದು. ನಾನು ಬೇಗ

ಹೋಗಬೇಕಾಗಿದೆ. ನಾನು ಕತ್ತಿಯನ್ನಾಗಲೀ ಇತರ
ಆಯುಧವನ್ನಾಗಲೀ ತರಲಿಲ್ಲ'' ಎಂದು ಕೇಳಿದನು.
10 ಯಾಜಕನು, ''ಇಲ್ಲಿರುವುದು ಫಿಲಿಷ್ಟಿಯನಾದ
ಗೊಲ್ಯಾತನ ಖಡ್ಗವೊಂದೇ. ಏಲಾ ಕಣಿವೆಯಲ್ಲಿ ನೀನು
ಅವನನ್ನು ಕೊಂದು ಅವನಿಂದ ನೀನು ಕಿತ್ತುಕೊಂಡ
ಖಡ್ಗವೇ ಅದು. ಆ ಖಡ್ಗವನ್ನು ಬಟ್ಟೆಯಲ್ಲಿ ಸುತ್ತಿ
ಎಫೋದಿನ ಹಿಂಭಾಗದಲ್ಲಿ ಇಟ್ಟಿದೆ. ನಿನಗೆ ಬೇಕಿದ್ದರೆ
ಅದನ್ನು ತೆಗೆದುಕೋ'' ಎಂದು ಉತ್ತರಿಸಿದನು.

ದಾವೀದನು, ''ಅದನ್ನು ನನಗೆ ಕೊಡು. ಗೊಲ್ಯಾತನ
ಖಡ್ಗಕ್ಕೆ ಸಮನಾದ ಬೇರೊಂದು ಖಡ್ಗವಿಲ್ಲ!'' ಎಂದನು.

### ದಾವೀದನು ಗತ್‌ಗೆ ಹೋದನು

11 ಆ ದಿನ ದಾವೀದನು ಸೌಲನಿಗೆ ಭಯಪಟ್ಟು ಗತ್‌ಗೆ
ರಾಜನಾದ ಆಕೀಷನ ಬಳಿಗೆ ಹೋದನು. 12 ಆಕೀಷನ
ಅಧಿಕಾರಿಗಳಿಗೆ ದಾವೀದನ ಆಗಮನ ಇಷ್ಟವಾಗಲಿಲ್ಲ.
ಅವರು, ''ಇವನು ದಾವೀದನು, ಇಸ್ರೇಲ್ ದೇಶದ
ರಾಜನು. ಇವನನ್ನು ಕುರಿತೇ ಇಸ್ರೇಲರು ಹಾಡುತ್ತಾರೆ.
ಅವರು ಇವನಿಗಾಗಿ ಹಾಡಿ ಕುಣಿಯುತ್ತಾರೆ.

''ಸೌಲನು ಸಾವಿರಾರು ಶತ್ರುಗಳನ್ನು ಕೊಂದನು.
ದಾವೀದನು ಲಕ್ಷಾಂತರ ಶತ್ರುಗಳನ್ನು
ಕೊಂದನು!''

ಎಂಬ ಈ ಹಾಡನ್ನು ಇಸ್ರೇಲರು ಹಾಡುತ್ತಾರೆ'' ಎಂದು
ಮಾತಾಡಿಕೊಂಡರು.

13 ಈ ಸಂಗತಿಗಳನ್ನು ಕೇಳಿದ ದಾವೀದನು ಗತ್‌ನ
ರಾಜನಾದ ಆಕೀಷನಿಗೆ ಬಹಳವಾಗಿ ಭಯಪಟ್ಟನು.
14 ಆದುದರಿಂದ ದಾವೀದನು ಆಕೀಷನ ಮತ್ತು ಅವನ
ಅಧಿಕಾರಿಗಳ ಎದುರಿನಲ್ಲಿ ಹುಚ್ಚನಂತೆ ನಟಿಸಿದನು.
ದಾವೀದನು ಅವರೊಂದಿಗೆ ಇರುವಾಗಲೆಲ್ಲ ಹುಚ್ಚನಂತೆ
ವರ್ತಿಸಿದನು. ಅವನು ದ್ವಾರದ ಬಾಗಿಲುಗಳ ಮೇಲೆ
ಉಗುಳಿದನು; ಅವನ ಜೊಲ್ಲು ಗಡ್ಡದವರೆಗೂ ಸುರಿಯು
ವಂತೆ ಮಾಡಿಕೊಂಡನು.

15 ಆಕೀಷನು ತನ್ನ ಅಧಿಕಾರಿಗಳಿಗೆ, ''ಅವನೊಬ್ಬ
ಹುಚ್ಚ! ಅವನನ್ನು ನನ್ನ ಬಳಿಗೆ ಏಕೆ ಕರೆತಂದಿರಿ? 16 ನನ್ನ
ಹತ್ತಿರ ಬೇಕಾದಷ್ಟು ಹುಚ್ಚರಿದ್ದಾರೆ. ನನ್ನ ಎದುರಿನಲ್ಲಿ
ಇವನು ಮಾಡುವ ಹುಚ್ಚಾಟವನ್ನು ನಾನು ನೋಡಲೆಂದು
ಕರೆತಂದಿರುವಿರೊ? ಇವನು ಮತ್ತೆ ನನ್ನ ಮನೆಯೊಳಕ್ಕೆ
ಬರಲು ಅವಕಾಶ ಕೊಡಬೇಡಿ'' ಎಂದನು.

### ದಾವೀದನು ಬೇರೆಬೇರೆ ಸ್ಥಳಗಳಿಗೆ ಹೋದನು

22 ದಾವೀದನು ಗತ್ತನ್ನು ಬಿಟ್ಟು ಅದುಲ್ಲಾಮ್
ಗವಿಗೆ ಓಡಿಹೋದನು. ದಾವೀದನು
ಅದುಲ್ಲಾಮಿನಲ್ಲಿರುವುದು ಅವನ ಸೋದರರಿಗೂ
ಬಂಧುಗಳಿಗೂ ತಿಳಿಯಿತು. ಅವರು ದಾವೀದನನ್ನು
ನೋಡಲು ಅಲ್ಲಿಗೆ ಹೋದರು. 2 ದಾವೀದನ ಜೊತೆ
ಅನೇಕ ಜನರು ಸೇರಿಕೊಂಡರು. ತೊಂದರೆಯಲ್ಲಿರು
ವವರು, ಸಾಲಗಾರರು ಮತ್ತು ಅತೃಪ್ತರಾದವರು ದಾವೀದ
ನನ್ನು ಆಶ್ರಯಿಸಿಕೊಂಡರು. ದಾವೀದನು ಅವರಿಗೆಲ್ಲಾ
ನಾಯಕನಾದನು. ದಾವೀದನೊಂದಿಗೆ ನಾನೂರು
ಜನರಿದ್ದರು.

3 ದಾವೀದನು ಅದುಲ್ಲಾಮನ್ನು ಬಿಟ್ಟು ಮೋವಾಬಿನ
ಮಿಚ್ಪೆಗೆ ಹೋದನು. ದಾವೀದನು ಮೋವಾಬ್ ರಾಜ
ನಿಗೆ, ''ದೇವರು ನನಗೇನು ಮಾಡುತ್ತಾನೆಂಬುದನ್ನು
ನಾನು ತಿಳಿದುಕೊಳ್ಳುವ ತನಕ, ನನ್ನ ತಂದೆ ತಾಯಿಗಳು
ನಿನ್ನಲ್ಲಿಗೆ ಬಂದು ಇರಲು ದಯವಿಟ್ಟು ನನಗೆ ಅವಕಾಶ
ಕೊಡು'' ಎಂದು ಕೇಳಿಕೊಂಡನು. 4 ದಾವೀದನು ತನ್ನ
ತಂದೆತಾಯಿಗಳನ್ನು ಮೋವಾಬ್ ರಾಜನ ಹತ್ತಿರ
ಬಿಟ್ಟನು. ದಾವೀದನ ತಂದೆತಾಯಿಗಳು ಅವನು ಕೋಟೆ
ಯಲ್ಲಿರುವ ತನಕ ಮೋವಾಬಿನ ರಾಜನೊಂದಿಗೆ
ನೆಲೆಸಿದರು.

5 ಆದರೆ ಗಾದ್ ಪ್ರವಾದಿಯು ದಾವೀದನಿಗೆ, ''ನೀನು
ಕೋಟೆಯಲ್ಲಿರಬೇಡ. ಯೆಹೂದ್ಯರ ದೇಶಕ್ಕೆ ಹೋಗು''
ಎಂದು ಹೇಳಿದನು. ಆದುದರಿಂದ ದಾವೀದನು ಹೆರೆತ್
ಅರಣ್ಯಕ್ಕೆ ಹೊರಟುಹೋದನು.

### ಸೌಲನಿಂದ ಅಹೀಮೆಲೆಕನ ಕುಟುಂಬದ ನಾಶನ

6 ದಾವೀದನ ಮತ್ತು ಅವನ ಜನರ ಬಗ್ಗೆ ಜನರು ತಿಳಿದಿ
ದ್ದಾರೆಂಬುದು ಸೌಲನಿಗೆ ಗೊತ್ತಾಯಿತು. ಗಿಬೆಯ ಬೆಟ್ಟದ
ಮೇಲಿನ ಮರದ ಕೆಳಗೆ ಸೌಲನು ಕುಳಿತಿದ್ದನು. ಸೌಲನ
ಕೈಯಲ್ಲಿ ಭರ್ಜಿಯಿತ್ತು. ಸೌಲನ ಅಧಿಕಾರಿಗಳೆಲ್ಲ ಅವನ
ಸುತ್ತಲೂ ನಿಂತಿದ್ದರು. 7 ಸೌಲನು ತನ್ನ ಸುತ್ತಲೂ ನಿಂತಿದ್ದ
ಅಧಿಕಾರಿಗಳಿಗೆ, ''ಬೆನ್ಯಾಮೀನನ ಜನರೇ, ಕೇಳಿ!
ಇಷಯನ ಮಗನಾದ ದಾವೀದನು ನಿಮಗೆ ಹೊಲ
ಗಳನ್ನೂ ದ್ರಾಕ್ಷಿತೋಟಗಳನ್ನೂ ಕೊಡುತ್ತಾನೆಂದು
ತಿಳಿದಿರುವಿರಾ? ದಾವೀದನು ನಿಮಗೆ ಸಹಸ್ರದಳಾಧಿ
ಪತಿಯಾಗಿ ಮತ್ತು ಶತದಳಾಧಿಪತಿಯಾಗಿ ಬಡ್ತಿ ನೀಡು
ತ್ತಾನೆಂದು ನೀವು ತಿಳಿದಿರುವಿರಾ? 8 ನೀವು ನನ್ನ ವಿರುದ್ಧ
ವಾಗಿ ಸಂಚುನಡೆಸುತ್ತಿರುವಿರಿ! ನೀವು ರಹಸ್ಯಯೋಜನೆ
ಗಳನ್ನು ಮಾಡಿದ್ದೀರಿ. ನನ್ನ ಮಗ ಯೋನಾತಾನನ ಬಗ್ಗೆ
ನಿಮ್ಮಲ್ಲಿ ಒಬ್ಬರೂ ನನಗೆ ತಿಳಿಸಲಿಲ್ಲ! ಅವನು ಇಷಯನ
ಮಗನ ಜೊತೆ ಒಪ್ಪಂದ ಮಾಡಿಕೊಂಡಿದ್ದಾನೆಂದು
ನಿಮ್ಮಲ್ಲಿ ಒಬ್ಬರೂ ನನಗೆ ತಿಳಿಸಲಿಲ್ಲ! ನಿಮ್ಮಲ್ಲಿ ಒಬ್ಬರೂ
ನನ್ನ ಬಗ್ಗೆ ಚಿಂತಿಸುವುದಿಲ್ಲ! ನನ್ನ ಮಗ ಯೋನಾತಾನನು
ದಾವೀದನನ್ನು ಪ್ರೋತ್ಸಾಹಿಸಿದ್ದಾನೆಂದು ನಿಮ್ಮಲ್ಲಿ
ಒಬ್ಬರೂ ನನಗೆ ತಿಳಿಸಲಿಲ್ಲ. ಅಡಗಿಕೊಂಡು ನನ್ನ ಮೇಲೆ
ಆಕ್ರಮಣ ಮಾಡುವಂತೆ ನನ್ನ ಸೇವಕನಾದ ದಾವೀದನಿಗೆ

ಯೋನಾತಾನನು ಹೇಳಿಕೊಟ್ಟಿದ್ದಾನೆ! ಈಗ ದಾವೀದನು ಮಾಡುತ್ತಿರುವುದು ಅದನ್ನೇ!'' ಎಂದು ಹೇಳಿದನು.

9ಸೌಲನ ಅಧಿಕಾರಿಗಳೊಂದಿಗೆ ಎದೋಮ್ಯನಾದ ದೋಯೇಗನು ನಿಂತಿದ್ದನು. ದೋಯೇಗನು, ''ನಾನು ನೋಬಿನಲ್ಲಿ ಇಷಯನ ಮಗನನ್ನು ನೋಡಿದೆನು. ದಾವೀದನು ಅಹೀಟೂಬನ ಮಗನಾದ ಅಹೀಮೆಲೆಕ
ನನ್ನು ನೋಡಲು ಬಂದಿದ್ದನು. 10ಅಹೀಮೆಲೆಕನು
ದಾವೀದನಿಗಾಗಿ ಯೆಹೋವನಲ್ಲಿ ಪ್ರಾರ್ಥಿಸಿದನು. ಅಹೀಮೆಲೆಕನು ದಾವೀದನಿಗೆ ಆಹಾರವನ್ನು ಸಹ ಕೊಟ್ಟನು; ಫಿಲಿಷ್ಟಿಯನಾದ ಗೊಲ್ಯಾತನ ಖಡ್ಗವನ್ನೂ ಕೊಟ್ಟನು'' ಎಂದು ಹೇಳಿದನು.

11ಆಗ ರಾಜನಾದ ಸೌಲನು ಯಾಜಕನನ್ನು ತನ್ನ ಹತ್ತಿರಕ್ಕೆ ಕರೆತರಲು ಕೆಲವು ಜನರಿಗೆ ಅಪ್ಪಣೆಕೊಟ್ಟನು. ಸೌಲನು, ಅಹೀಟೂಬನ ಮಗನಾದ ಅಹೀಮೆಲೆಕನನ್ನೂ ಅವನ ಎಲ್ಲ ಬಂಧುಗಳನ್ನೂ ಕರೆತರಲು ಅವರಿಗೆ ಹೇಳಿದನು. ಅಹೀಮೆಲೆಕನ ಬಂಧುಗಳು ನೋಬಿನಲ್ಲಿ ಯಾಜಕರಾಗಿದ್ದರು. ಅವರೆಲ್ಲ ರಾಜನ ಹತ್ತಿರಕ್ಕೆ
ಬಂದರು. 12ಸೌಲನು ಅಹೀಮೆಲೆಕನಿಗೆ,
''ಅಹೀಟೂಬನ ಮಗನೇ, ಈಗ ನನ್ನ ಮಾತನ್ನು ಕೇಳು'' ಎಂದು ಹೇಳಿದನು.

ಅಹೀಮೆಲೆಕನು, ''ಆಗಲೀ, ಸ್ವಾಮಿ'' ಎಂದು ಉತ್ತರಿಸಿದನು.

13ಸೌಲನು ಅಹೀಮೆಲೆಕನಿಗೆ, ''ನೀನು ಮತ್ತು ಇಷಯನ ಮಗ ನನ್ನ ವಿರುದ್ಧ ರಹಸ್ಯಯೋಜನೆಗಳನ್ನು ಏಕೆ ಮಾಡಿದಿರಿ? ನೀನು ದಾವೀದನಿಗೆ ರೊಟ್ಟಿಯನ್ನೂ ಖಡ್ಗವನ್ನೂ ಕೊಟ್ಟೆ! ನೀನು ಅವನಿಗಾಗಿ ದೇವರಲ್ಲಿ ಪ್ರಾರ್ಥಿಸಿದೆ. ಈಗ ದಾವೀದನು ನನ್ನ ಮೇಲೆ ಆಕ್ರಮಣ ಮಾಡಲು ಕಾಯುತ್ತಿದ್ದಾನೆ!'' ಎಂದು ಹೇಳಿದನು.

14ಅಹೀಮೆಲೆಕನು, ''ದಾವೀದನು ನಿನಗೆ ಬಹಳ ನಂಬಿಗಸ್ತನಾಗಿದ್ದಾನೆ. ದಾವೀದನಷ್ಟು ನಂಬಿಗಸ್ತನು ನಿನ್ನ ಇತರ ಅಧಿಕಾರಿಗಳಲ್ಲಿ ಇಲ್ಲವೇ ಇಲ್ಲ. ದಾವೀದನು ನಿನ್ನ ಸ್ವಂತ ಅಳಿಯ. ದಾವೀದನು ನಿನ್ನ ಅಂಗರಕ್ಷಕರ ದಳಪತಿ. ದಾವೀದನನ್ನು ನಿನ್ನ ಸ್ವಂತ ಕುಟುಂಬವೆಲ್ಲ ಗೌರವಿ
ಸುತ್ತದೆ. 15ದಾವೀದನಿಗಾಗಿ ನಾನು ದೇವರಲ್ಲಿ ಪ್ರಾರ್ಥಿ
ಸಿದ್ದು ಅದು ಮೊದಲನೆಯ ಸಲವಂತೂ ಅಲ್ಲವೇ ಅಲ್ಲ. ನನ್ನ ಮೇಲಾಗಲೀ ನನ್ನ ಬಂಧುಗಳ ಮೇಲಾಗಲೀ ತಪ್ಪು ಹೊರಿಸಬೇಡ. ನಾವೆಲ್ಲ ನಿನ್ನ ಸೇವಕರು. ಈಗ ಏನು ನಡೆಯುತ್ತಿದೆಯೋ ಅದು ನನಗೆ ಸ್ವಲ್ಪವೂ ತಿಳಿದಿಲ್ಲ'' ಎಂದು ಉತ್ತರಿಸಿದನು.

16ಆದರೆ ರಾಜನು, ''ಅಹೀಮೆಲೆಕನೇ, ನೀನು ಮತ್ತು ನಿನ್ನ ಬಂಧುಗಳೆಲ್ಲರೂ ಸಾಯಲೇಬೇಕು!'' ಎಂದು ಹೇಳಿ
ದನು. 17ನಂತರ ರಾಜನು ತನ್ನ ಸಿಪಾಯಿಗಳಿಗೆ, ''ನೀವು
ಹೋಗಿ ಯೆಹೋವನ ಯಾಜಕರನ್ನು ಕೊಂದುಹಾಕಿ. ಅವರು ದಾವೀದನ ಪಕ್ಷವಹಿಸಿದ್ದಾರೆ. ದಾವೀದನು ಓಡಿಹೋಗುತ್ತಿರುವುದು ತಿಳಿದಿದ್ದರೂ ಅವರು ನನಗೆ ತಿಳಿಸಲಿಲ್ಲ!'' ಎಂದನು.

ಆದರೆ ಯೆಹೋವನ ಯಾಜಕರನ್ನು ಕೊಲ್ಲಲು ಸೈನಿಕರು ನಿರಾಕರಿಸಿದರು.

18ಆದ್ದರಿಂದ ರಾಜನು ದೋಯೇಗನಿಗೆ, ''ನೀನು ಹೋಗಿ ಯಾಜಕರನ್ನು ಕೊಂದುಹಾಕು'' ಎಂದು ಹೇಳಿದನು. ಆದ್ದರಿಂದ ಎದೋಮ್ಯನಾದ ದೋಯೇಗನು ಹೋಗಿ ಆ ದಿನ ಎಂಭತ್ತೈದು ಮಂದಿ ಯಾಜಕರನ್ನು
ಕೊಂದನು. 19ನೋಬ್ ಪಟ್ಟಣವು ಯಾಜಕರ ನಗರ
ವಾಗಿತ್ತು. ದೋಯೇಗನು ನೋಬ್ ಪಟ್ಟಣದ ಎಲ್ಲ ಜನರನ್ನೂ ಅಂದರೆ ಗಂಡಸರನ್ನೂ ಹೆಂಗಸರನ್ನೂ ಮಕ್ಕಳನ್ನೂ ಹಸುಗೂಸುಗಳನ್ನೂ ತನ್ನ ಖಡ್ಗದಿಂದ ಕೊಂದುಹಾಕಿದನು. ದೋಯೇಗನು ಅವರ ಹಸುಗಳನ್ನೂ ಕತ್ತೆಗಳನ್ನೂ ಕುರಿಗಳನ್ನೂ ಕೊಂದುಬಿಟ್ಟನು.

20ಆದರೆ ಎಬ್ಯಾತಾರನು ತಪ್ಪಿಸಿಕೊಂಡನು. ಎಬ್ಯಾತಾರನು ಅಹೀಮೆಲೆಕನ ಮಗ. ಅಹೀಮೆಲೆಕನು ಅಹೀಟೂಬನ ಮಗ. ಎಬ್ಯಾತಾರನು ಓಡಿಹೋಗಿ
ದಾವೀದನ ಜೊತೆ ಸೇರಿಕೊಂಡನು. 21ಯೆಹೋವನ
ಯಾಜಕರನ್ನು ಸೌಲನು ಕೊಲ್ಲಿಸಿದನೆಂದು ಎಬ್ಯಾ
ತಾರನು ದಾವೀದನಿಗೆ ತಿಳಿಸಿದನು. 22ಆಗ ದಾವೀದನು
ಎಬ್ಯಾತಾರನಿಗೆ, ''ನಾನು ಎದೋಮ್ಯನಾದ ದೋಯೇಗನನ್ನು ಆ ದಿನ ನೋಬ್ ಪಟ್ಟಣದಲ್ಲಿ ನೋಡಿದೆ. ಅವನು ಸೌಲನಿಗೆ ತಿಳಿಸುತ್ತಾನೆಂದು ನನಗೆ ಗೊತ್ತಿತ್ತು! ನಿನ್ನ ತಂದೆಯ ಕುಟುಂಬದ ಮರಣಕ್ಕೆ ನಾನೇ ಕಾರಣ.
23ನಿನ್ನನ್ನು ಕೊಲ್ಲಲು ಯಾವ ಮನುಷ್ಯ ಬಯಸಿರುವನೋ ಅವನು ನನ್ನನ್ನು ಸಹ ಕೊಲ್ಲಲು ಬಯಸಿದ್ದಾನೆ. ನನ್ನ ಜೊತೆಯಲ್ಲಿರು. ಆಗ ನೀನು ಸುರಕ್ಷಿತವಾಗಿರುವೆ'' ಎಂದು ಹೇಳಿದನು.

## ಕೆಯೀಲಾದಲ್ಲಿ ದಾವೀದನು

23 ಜನರು ದಾವೀದನಿಗೆ, ''ನೋಡು, ಫಿಲಿಷ್ಟಿಯರು ಕೆಯೀಲಾದವರ ವಿರುದ್ಧ ಹೋರಾಡುತ್ತಿದ್ದಾರೆ; ಅವರು ಕಣದಿಂದ ಧಾನ್ಯವನ್ನು ಸೂರೆ ಮಾಡುತ್ತಿದ್ದಾರೆ'' ಎಂದು ಹೇಳಿದನು.

2ದಾವೀದನು, ''ನಾನು ಹೋಗಿ ಈ ಫಿಲಿಷ್ಟಿಯರೊಡನೆ ಹೋರಾಡಲೇ?'' ಎಂದು ಯೆಹೋವನನ್ನು ಕೇಳಿದನು.

ಯೆಹೋವನು ದಾವೀದನಿಗೆ, ''ಹೋಗು ಫಿಲಿಷ್ಟಿಯರ ಮೇಲೆ ಆಕ್ರಮಣ ಮಾಡು. ಕೆಯೀಲಾವನ್ನು ರಕ್ಷಿಸು''
ಎಂದು ಹೇಳಿದನು. 3ಆದರೆ ದಾವೀದನ ಜನರು
ಅವನಿಗೆ, ''ನೋಡು, ನಾವು ಯೆಹೂದದಲ್ಲಿದ್ದರೂ ಹೆದರಿರುವೆವು. ಫಿಲಿಷ್ಟಿಯರ ಸೈನ್ಯವೆಲ್ಲಿದೆಯೊ ಅಲ್ಲಿಗೆ

ನಾವು ಹೋದರೆ, ಇನ್ನೆಷ್ಟು ಹೆದರುತ್ತೇವೆ ಎಂಬುದನ್ನು
ಯೋಚಿಸು'' ಎಂದರು.
4 ದಾವೀದನು ಮತ್ತೆ ಯೆಹೋವನನ್ನು ಕೇಳಿದನು.
ಯೆಹೋವನು ದಾವೀದನಿಗೆ, ``ಕೆಯೀಲಾಕ್ಕೆ ಹೋಗು.
ಫಿಲಿಷ್ಟಿಯರನ್ನು ಸೋಲಿಸಲು ನಾನು ನಿನಗೆ ಸಹಾಯ
ಮಾಡುತ್ತೇನೆ'' ಎಂದು ಹೇಳಿದನು. 5 ಹೀಗೆ ದಾವೀದನು
ಮತ್ತು ಅವನ ಜನರು ಕೆಯೀಲಾಕ್ಕೆ ಹೋದರು.
ದಾವೀದನ ಜನರು ಫಿಲಿಷ್ಟಿಯರೊಡನೆ ಹೋರಾಡಿ ಅವ
ರನ್ನು ಸೋಲಿಸಿ ಅವರ ಹಸುಗಳನ್ನು ವಶಪಡಿಸಿ
ಕೊಂಡರು. ದಾವೀದನು ಈ ರೀತಿಯಲ್ಲಿ ಕೆಯೀಲಾದ
ಜನರನ್ನು ರಕ್ಷಿಸಿದನು. 6 (ಎಬ್ಯಾತಾರನು ದಾವೀದನ ಹತ್ತಿ
ರಕ್ಕೆ ಓಡಿಹೋದಾಗ ತನ್ನೊಂದಿಗೆ ಒಂದು ಏಫೋದನ್ನು
ತೆಗೆದುಕೊಂಡಿದ್ದನು.)
7 ದಾವೀದನು ಈಗ ಕೆಯೀಲಾದಲ್ಲಿದ್ದಾನೆಂದು ಜನರು
ಸೌಲನಿಗೆ ತಿಳಿಸಿದರು. ಸೌಲನು, ``ದೇವರು ದಾವೀದ
ನನ್ನು ನನಗೆ ಕೊಟ್ಟಿದ್ದಾನೆ! ದಾವೀದನು ತಾನಾಗಿಯೇ
ಸಿಕ್ಕಿಹಾಕಿಕೊಂಡಿದ್ದಾನೆ. ಅವನು, ಬಾಗಿಲುಗಳಿರುವ
ಹಾಗೂ ಕಬ್ಬಿಣದ ಸಲಾಕೆಗಳಿಂದ ಬೀಗ ಹಾಕಬಲ್ಲ
ಬಾಗಿಲುಗಳಿರುವ ಪಟ್ಟಣದೊಳಕ್ಕೆ ಹೋಗಿದ್ದಾನೆ''
ಎಂದು ಹೇಳಿದನು. 8 ಸೌಲನು ಯುದ್ಧಕ್ಕಾಗಿ ತನ್ನ ಸೈನ್ಯವ
ನ್ನೆಲ್ಲ ಒಟ್ಟಿಗೆ ಕರೆದನು. ದಾವೀದನನ್ನೂ ಅವನ ಜನ
ರನ್ನೂ ಆಕ್ರಮಿಸಲು ಕೆಯೀಲಾಕ್ಕೆ ಹೋಗಲು ಅವರೆಲ್ಲ
ಸಿದ್ಧಗೊಂಡರು.
9 ಸೌಲನು ತನ್ನ ವಿರುದ್ಧವಾಗಿ ಉಪಾಯಗಳನ್ನು
ಮಾಡುತ್ತಿದ್ದಾನೆಂಬುದು ದಾವೀದನಿಗೆ ತಿಳಿಯಿತು. ಆಗ
ದಾವೀದನು ಯಾಜಕನಾದ ಎಬ್ಯಾತಾರನಿಗೆ,
``ಏಫೋದನ್ನು ತೆಗೆದುಕೊಂಡು ಬಾ'' ಎಂದನು.
10 ದಾವೀದನು, ``ಇಸ್ರೇಲರ ದೇವರಾದ
ಯೆಹೋವನೇ, ಸೌಲನು ನನಗಾಗಿ ಕೆಯೀಲಾಕ್ಕೆ
ಬರುತ್ತಾನೆಂಬುದೂ ಈ ಪಟ್ಟಣವನ್ನು ನಾಶಗೊಳಿಸುತ್ತಾ
ನೆಂಬುದೂ ತಿಳಿಯಿತು. 11 ಸೌಲನು ಕೆಯೀಲಾಕ್ಕೆ ಬರು
ತ್ತಾನೆಯೇ? ಕೆಯೀಲಾದ ಜನರು ನನ್ನನ್ನು ಸೌಲನಿಗೆ
ಒಪ್ಪಿಸುತ್ತಾರೆಯೇ? ಇಸ್ರೇಲರ ದೇವರಾದ
ಯೆಹೋವನೇ, ನಾನು ನಿನ್ನ ಸೇವಕ! ದಯವಿಟ್ಟು ನನಗೆ
ತಿಳಿಸು!'' ಎಂದು ಪ್ರಾರ್ಥಿಸಿದನು.
ಯೆಹೋವನು, ``ಸೌಲನು ಬರುತ್ತಾನೆ'' ಎಂದು
ಉತ್ತರಿಸಿದನು.
12 ಅನಂತರ ದಾವೀದನು, ``ಕೆಯೀಲಾದ ಜನರು
ನನ್ನನ್ನೂ ನನ್ನ ಜನರನ್ನೂ ಸೌಲನಿಗೆ ಒಪ್ಪಿಸುತ್ತಾರೆಯೇ?
'' ಎಂದು ಕೇಳಿದನು.
ಯೆಹೋವನು, ``ಅವರು ಒಪ್ಪಿಸುತ್ತಾರೆ''ಎಂದನು.
13 ಆದ್ದರಿಂದ ದಾವೀದನು ಮತ್ತು ಅವನ ಜನರು
ಕೆಯೀಲಾವನ್ನು ಬಿಟ್ಟುಹೋದರು. ದಾವೀದನ ಜೊತೆ
ಯಲ್ಲಿ ಸುಮಾರು ಆರುನೂರು ಜನರಿದ್ದರು.
ದಾವೀದನು ಮತ್ತು ಅವನ ಜನರು ಸ್ಥಳದಿಂದ ಸ್ಥಳಕ್ಕೆ
ಹೋಗುತ್ತಿದ್ದರು. ದಾವೀದನು ಕೆಯೀಲಾದಿಂದ ತಪ್ಪಿಸಿ
ಕೊಂಡು ಹೋದನೆಂಬುದು ಸೌಲನಿಗೆ ತಿಳಿಯಿತು. ಆದ್ದ
ರಿಂದ ಸೌಲನು ಆ ನಗರಕ್ಕೆ ಹೋಗಲಿಲ್ಲ.

## ಸೌಲನು ದಾವೀದನನ್ನು ಅಟ್ಟಿಸಿಕೊಂಡು ಹೋಗುವನು

14 ದಾವೀದನು ಜೀಫ್ ಅರಣ್ಯದಲ್ಲಿರುವ ಬೆಟ್ಟ
ಪ್ರದೇಶವಾದ ಆಶ್ರಯಗಿರಿಗಳಲ್ಲಿ ಅಡಗಿಕೊಂಡಿದ್ದನು.
ಸೌಲನು ಪ್ರತಿದಿನವೂ ದಾವೀದನಿಗಾಗಿ ಹುಡುಕು
ತ್ತಿದ್ದನು, ಆದರೆ ದಾವೀದನನ್ನು ಹಿಡಿಯಲು
ಯೆಹೋವನು ಸೌಲನಿಗೆ ಅವಕಾಶ ಕೊಡಲಿಲ್ಲ.
15 ದಾವೀದನು ಜೀಫ್ ಅರಣ್ಯದ ಹೋರೆಷದಲ್ಲಿ
ದ್ದನು. ಸೌಲನು ತನ್ನನ್ನು ಕೊಲ್ಲಲು ಬರುತ್ತಾನೆಂದು
ದಾವೀದನು ಹೆದರಿದ್ದನು. 16 ಆದರೆ ಸೌಲನ ಮಗನಾದ
ಯೋನಾತಾನನು ಹೋರೆಷಿಗೆ ಹೋಗಿ ದಾವೀದನನ್ನು
ಸಂಧಿಸಿ ದೇವರಲ್ಲಿ ಹೆಚ್ಚು ನಂಬಿಕೆಯನ್ನಿಡುವಂತೆ ಅವ
ನನ್ನು ಪ್ರೋತ್ಸಾಹಿಸಿ, 17 ``ಹೆದರಬೇಡ ನನ್ನ ತಂದೆಯಾದ
ಸೌಲನು ನಿನಗೆ ತೊಂದರೆ ಮಾಡುವುದಿಲ್ಲ. ನೀನು
ಇಸ್ರೇಲಿನ ರಾಜನಾಗುವೆ! ನಾನು ನಿನಗೆ ಎರಡನೆಯವ
ನಾಗುತ್ತೇನೆ. ಇದು ನನ್ನ ತಂದೆಗೂ ಸಹ ತಿಳಿದಿದೆ''ಎಂದು
ಹೇಳಿದನು.
18 ಯೋನಾತಾನನು ಮತ್ತು ದಾವೀದನು ಯೆಹೋವನ
ಸನ್ನಿಧಿಯಲ್ಲಿ ಒಂದು ಒಡಂಬಡಿಕೆಯನ್ನು ಮಾಡಿ
ಕೊಂಡರು. ನಂತರ ಯೋನಾತಾನನು ಮನೆಗೆ
ಹೋದನು. ದಾವೀದನು ಹೋರೆಷಿನಲ್ಲಿ ನೆಲೆಸಿದನು.

## ದಾವೀದನ ಬಗ್ಗೆ ಜೀಫಿನ ಜನರು ಸೌಲನಿಗೆ ತಿಳಿಸಿದರು

19 ಜೀಫಿನ ಜನರು ಗಿಬೆಯದಲ್ಲಿದ್ದ ಸೌಲನ ಬಳಿಗೆ
ಬಂದು, ``ದಾವೀದನು ನಮ್ಮ ಪ್ರಾಂತ್ಯದಲ್ಲಿ ಅಡಗಿ
ಕೊಂಡಿದ್ದಾನೆ. ಅವನು ಹೋರೆಷಿನ ಕೋಟೆಯಲ್ಲಿದ್ದಾನೆ.
ಅವನು ಜೆಸಿಮೋನನ ದಕ್ಷಿಣಕ್ಕಿರುವ ಹಕೀಲಾ ಬೆಟ್ಟದ
ಮೇಲಿದ್ದಾನೆ. 20 ಈಗ ರಾಜನೇ, ನಿನಗಿಷ್ಟ ಬಂದಾಗ
ಯಾವ ಸಮಯದಲ್ಲೇ ಆಗಲಿ ಬಂದುಬಿಡು. ದಾವೀದ
ನನ್ನು ನಿನಗೆ ಒಪ್ಪಿಸುವುದು ನಮ್ಮ ಕರ್ತವ್ಯ '' ಎಂದು
ಹೇಳಿದರು.
21 ಸೌಲನು, ``ನೀವು ನನಗೆ ಸಹಾಯ ಮಾಡುತ್ತಿರುವು
ದಕ್ಕಾಗಿ ದೇವರು ನಿಮ್ಮನ್ನು ಆಶೀರ್ವದಿಸಲಿ. 22 ಹೋಗಿ,
ಅವನ ಬಗ್ಗೆ ಹೆಚ್ಚು ತಿಳಿದುಕೊಳ್ಳಿ. ದಾವೀದನು ಎಲ್ಲಿ
ನೆಲೆಸಿದ್ದಾನೆಂಬುದನ್ನೂ ಅವನನ್ನು ನೋಡಿದವರು
ಯಾರೆಂಬುದನ್ನೂ ಕಂಡುಹಿಡಿಯಿರಿ. ಅವನು ಬಹಳ
ಯುಕ್ತಿವಂತನಾಗಿದ್ದಾನೆ. 23 ದಾವೀದನು ಅಡಗಿಕೊಳ್ಳತಕ್ಕ

ಎಲ್ಲಾ ಸ್ಥಳಗಳನ್ನು ಕಂಡುಹಿಡಿಯಿರಿ. ನೀವು ಹಿಂದಿರುಗಿ
ನನ್ನ ಬಳಿಗೆ ಬಂದು ಎಲ್ಲವನ್ನೂ ನನಗೆ ತಿಳಿಸಿ. ಅನಂತರ
ನಾನು ನಿಮ್ಮೊಂದಿಗೆ ಬರುತ್ತೇನೆ. ದಾವೀದನು ಆ ಪ್ರಾಂತ್ಯ
ದಲ್ಲಿದ್ದರೆ, ನಾನು ಅವನನ್ನು ಕಂಡುಹಿಡಿಯುತ್ತೇನೆ.
ಅವನು ಯೆಹೂದ ಕುಲಗಳಲ್ಲಿ ಎಲ್ಲೇ ಇದ್ದರೂ ಸಹ
ನಾನು ಅವನನ್ನು ಕಂಡುಹಿಡಿಯುತ್ತೇನೆ'' ಎಂದು
ಹೇಳಿದನು.

24ನಂತರ ಜೇಫಿನ ಜನರು ಜೇಫಿಗೆ ಹಿಂದಿರುಗಿದರು.
ಸೌಲನು ಅನಂತರ ಅಲ್ಲಿಗೆ ಹೋದನು.

ದಾವೀದನು ಮತ್ತುಅವನ ಜನರು ಮಾವೋನ್
ಅರಣ್ಯದ ದಕ್ಷಿಣ ದಿಕ್ಕಿನಲ್ಲಿರುವ ಜೆಸಿಮೋನಿನ ಮರಳು
ಗಾಡಿನ ಪ್ರಾಂತ್ಯದಲ್ಲಿದ್ದರು. 25ಸೌಲನು ಮತ್ತು ಅವನ
ಜನರು ದಾವೀದನನ್ನು ನೋಡಲು ಹೋದರು. ಆದರೆ
ದಾವೀದನನ್ನು ಜನರು ಎಚ್ಚರಿಸಿದರು. ಸೌಲನು ಅವ
ನನ್ನು ಹುಡುಕುತ್ತಿರುವನೆಂದು ಜನರು ಅವನಿಗೆ ಹೇಳಿ
ದರು. ದಾವೀದನು ಮಾವೋನಿನ ಅರಣ್ಯದಲ್ಲಿರುವ ಕಡಿ
ದಾದ ಬೆಟ್ಟಕ್ಕೆ ಹೋದನು. ದಾವೀದನು ಮಾವೋನಿನ
ಅರಣ್ಯಕ್ಕೆ ಹೋದನೆಂಬುದನ್ನು ಕೇಳಿದ ಸೌಲನು
ದಾವೀದನನ್ನು ಕಂಡು ಹಿಡಿಯಲು ಆ ಸ್ಥಳಕ್ಕೆ ಹೋದನು.
26ಸೌಲನು ಬೆಟ್ಟದ ಒಂದು ದಿಕ್ಕಿನಲ್ಲಿದ್ದನು. ದಾವೀದ
ಮತ್ತು ಅವನ ಜನರು ಅದೇ ಬೆಟ್ಟದ ಮತ್ತೊಂದು
ದಿಕ್ಕಿನಲ್ಲಿದ್ದರು. ದಾವೀದನು ಸೌಲನಿಂದ ದೂರ
ಹೋಗಲು ತವಕಿಸುತ್ತಿದ್ದನು. ದಾವೀದನನ್ನು ಅವನ ಜನ
ರೊಡನೆ ಬಂಧಿಸಲು ಸೌಲನು ತನ್ನ ಸೈನಿಕರೊಂದಿಗೆ
ಬೆಟ್ಟದ ಸುತ್ತಲೂ ಹೋಗುತ್ತಿದ್ದನು.
27ಆದರೆ ಸೌಲನ ಬಳಿಗೆ ಒಬ್ಬ ಸಂದೇಶಕನು ಬಂದು,
''ಫಿಲಿಷ್ಟಿಯರು ನಮ್ಮನ್ನು ಆಕ್ರಮಣ ಮಾಡುತ್ತಿದ್ದಾರೆ,
ಬೇಗ ಬಾ!'' ಎಂದು ಹೇಳಿದನು.
28ಆದ್ದರಿಂದ ದಾವೀದನನ್ನು ಅಟ್ಟಿಸಿಕೊಂಡು ಹೋಗು
ವುದನ್ನು ಸೌಲನು ನಿಲ್ಲಿಸಿ ಫಿಲಿಷ್ಟಿಯರೊಡನೆ ಹೋರಾ
ಡಲು ಹೋದನು. ಆದುದರಿಂದಲೇ ಜನರು ಆ ಜಾಗ
ವನ್ನು ''ತಡೆ ಬಂಡೆ'' ಎಂದು ಕರೆಯುತ್ತಾರೆ.
29ದಾವೀದನು ಮಾವೋನ್ ಅರಣ್ಯವನ್ನು ಬಿಟ್ಟು
ಏಂಗೆದಿಯ ಗಿರಿಗಳಿಗೆ ಹೋದನು.

### ದಾವೀದನಿಂದ ಸೌಲನಿಗಾದ ಅವಮಾನ

24 ಸೌಲನು ಫಿಲಿಷ್ಟಿಯರನ್ನು ಅಟ್ಟಿಸಿಕೊಂಡು
ಹೋಗಿ ಓಡಿಸಿದನಂತರ, ಅವನಿಗೆ ಜನರು,
''ದಾವೀದನು ಏಂಗೆದಿಯ ಹತ್ತಿರದ ಮರಳುಗಾಡಿ
ನಲ್ಲಿದ್ದಾನೆ''ಎಂದು ಹೇಳಿದರು.
2ಇಸ್ರೇಲಿನ ಮೂರು ಸಾವಿರ ಜನರನ್ನು ಸೌಲನು
ಆರಿಸಿದನು. ಸೌಲನು ಈ ಜನರೊಂದಿಗೆ ದಾವೀದನನ್ನು
ಮತ್ತು ಅವನ ಜನರನ್ನು ಹುಡುಕಲು ಆರಂಭಿಸಿದನು.
ಅವರು ಕಾಡುಹೋತದ ಬಂಡೆಗಳ ಹತ್ತಿರ ಹುಡುಕಿದರು.
3ಸೌಲನು ರಸ್ತೆಯ ಪಕ್ಕದ ಕುರಿದೊಡ್ಡಿಗೆ ಬಂದನು.
ಅಲ್ಲಿಗೆ ಸಮೀಪದಲ್ಲಿ ಒಂದು ಗವಿಯಿದ್ದಿತು. ಸೌಲನು
ಶೌಚಕ್ರೋಸ್ಕರ ಗವಿಯ ಒಳಗಡೆಗೆ ಹೋದನು.
ದಾವೀದ ಮತ್ತು ಅವನ ಜನರು ಅದೇ ಗವಿಯ ಹಿಂದಗಡೆ
ಅಡಗಿಕೊಂಡಿದ್ದರು. 4ಜನರು ದಾವೀದನಿಗೆ,
''ಯೆಹೋವನು ಈ ದಿನವನ್ನೇ ಕುರಿತು ನಿನ್ನೊಂದಿಗೆ
ಮಾತನಾಡಿದನು. ಯೆಹೋವನು ನಿನಗೆ, 'ನಾನು ನಿನ್ನ
ಶತ್ರುವನ್ನು ನಿನಗೆ ಒಪ್ಪಿಸುತ್ತೇನೆ. ನಿನ್ನ ಇಷ್ಟದಂತೆ ಶತ್ರು
ವಿಗೆ ಏನು ಬೇಕಾದರೂ ಮಾಡು' ಎಂದು ಹೇಳಿದನು''
ಎಂದರು.

ನಂತರ ದಾವೀದನು ಸೌಲನ ಹತ್ತಿರಕ್ಕೆ ತೆವಳುತ್ತಾ
ಹೋಗಿ ಸೌಲನ ಅಂಗಿಯ ಒಂದು ಮೂಲೆಯನ್ನು
ಕತ್ತರಿಸಿದನು. ದಾವೀದನನ್ನು ಸೌಲನು ನೋಡಲಿಲ್ಲ.
5ತರುವಾಯ ಸೌಲನ ಅಂಗಿಯ ಮೂಲೆಯನ್ನು ಕತ್ತರಿಸಿ
ದ್ದಕ್ಕಾಗಿ ದಾವೀದನಿಗೆ ಅಸಮಾಧಾನವಾಯಿತು.
6ದಾವೀದನು ತನ್ನ ಜನರಿಗೆ, ''ಸೌಲನು ಯೆಹೋವ
ನಿಂದ ಅಭಿಷೇಕಿಸಲ್ಪಟ್ಟವನೂ ನನ್ನ ರಾಜನೂ ಆಗಿರು
ವುದರಿಂದ ನಾನು ಅವನ ವಿರುದ್ಧವಾಗಿ ಏನೂ ಮಾಡ
ಬಾರದು!'' ಎಂದು ಹೇಳಿದನು. 7ದಾವೀದನು ತನ್ನ
ಜನರನ್ನು ತಡೆಯಲು ಈ ಮಾತುಗಳನ್ನು ಹೇಳಿದನು.
ಸೌಲನನ್ನು ಆಕ್ರಮಿಸಲು ದಾವೀದನು ತನ್ನ ಜನರಿಗೆ
ಅವಕಾಶ ಕೊಡಲಿಲ್ಲ.

ಸೌಲನು ಗವಿಯನ್ನು ಬಿಟ್ಟು ತನ್ನ ದಾರಿಯಲ್ಲಿ
ಹೊರಟನು. 8ದಾವೀದನು ಗವಿಯಿಂದ ಹೊರಗೆ
ಬಂದನು. ದಾವೀದನು ಸೌಲನಿಗೆ, ''ಅರಸನೇ, ನನ್ನ
ಒಡೆಯನೇ!'' ಎಂದು ಕೂಗಿದನು.

ಸೌಲನು ಹಿಂದಿರುಗಿ ನೋಡಿದಾಗ ದಾವೀದನು
ಅವನಿಗೆ ಸಾಷ್ಟಾಂಗ ನಮಸ್ಕಾರಮಾಡಿ, 9'''ದಾವೀದನು
ನಿನಗೆ ಕೇಡು ಮಾಡಲು ಸಂಚುಗಳನ್ನು ಮಾಡುತ್ತಿದ್ದಾನೆ'
ಎಂಬುದಾಗಿ ಜನರು ಹೇಳುವಾಗ ನೀನು ಕೇಳುವುದೇಕೆ?
10ನಾನು ನಿನಗೆ ಕೇಡು ಮಾಡಲು ಇಚ್ಛಿಸುವುದಿಲ್ಲ! ನೀನು
ಅದನ್ನು ನಿನ್ನ ಸ್ವಂತ ಕಣ್ಣುಗಳಿಂದ ನೋಡಬಹುದು! ಈ
ದಿನ ಗವಿಯಲ್ಲಿ ಯೆಹೋವನು ನಿನ್ನನ್ನು ನನಗೆ ಒಪ್ಪಿ
ಸಿದ್ದನು. ಆದರೆ ನಾನು ನಿನ್ನನ್ನು ಕೊಲ್ಲಲು ನಿರಾಕರಿಸಿದೆ.
ನಾನು ನಿನಗೆ ದಯಾಳುವಾಗಿದ್ದೆ. 'ನಾನು ನನ್ನ ಒಡೆಯ
ನಿಗೆ ಕೇಡು ಮಾಡುವುದಿಲ್ಲ. ಸೌಲನು ಯೆಹೋವನಿಂದ
ಅಭೀಷೇಕಿಸಲ್ಪಟ್ಟ ರಾಜ!' 11ನನ್ನ ಕೈಯಲ್ಲಿರುವ ಚೂರು
ಬಟ್ಟೆಯನ್ನು ನೋಡು. ನಾನು ನಿನ್ನ ಅಂಗಿಯ ಮೂಲೆ
ಯನ್ನು ಕತ್ತರಿಸಿಹಾಕಿದೆ. ನಾನು ನಿನ್ನನ್ನು ಕೊಲ್ಲ
ಬಹುದಿತ್ತು, ಆದರೆ ಕೊಲ್ಲಲಿಲ್ಲ! ನೀನು ಇದನ್ನು ಅರ್ಥ
ಮಾಡಿಕೊಳ್ಳಬೇಕೆಂದು ನಾನು ಬಯಸಿದ್ದೇನೆ. ನಾನು
ನಿನ್ನ ವಿರುದ್ಧವಾಗಿ ಯಾವ ಸಂಚನ್ನೂ ಮಾಡುತ್ತಿಲ್ಲವೆಂದು

ನೀನು ತಿಳಿದುಕೊಳ್ಳಬೇಕಾಗಿದೆ! ನಾನು ನಿನಗೆ ಯಾವ
ತಪ್ಪನ್ನೂ ಮಾಡಿಲ್ಲ! ಆದರೆ ನೀನು ನನ್ನನ್ನು ಹುಡುಕು
ತ್ತಿರುವೆ; ನನ್ನನ್ನು ಕೊಲ್ಲಲು ಪ್ರಯತ್ನಿಸುತ್ತಿರುವೆ.
12ಯೆಹೋವನೇ ನಮಗೆ ನ್ಯಾಯಾಧೀಶನಾಗಿರಲಿ!
ನೀನು ಮಾಡಿರುವ ತಪ್ಪಿಗಾಗಿ ಯೆಹೋವನು ನಿನ್ನನ್ನು
ದಂಡಿಸಲಿ. ಆದರೆ ನಾನು ನಿನ್ನೊಡನೆ ಹೋರಾಡುವು
ದಿಲ್ಲ. 13'ಕೆಟ್ಟ ಕಾರ್ಯಗಳನ್ನು ಕೆಟ್ಟ ಜನರೇ ಮಾಡು
ತ್ತಾರೆ!' ಎಂಬ ಹಳೆಯ ನಾಣ್ಣುಡಿಯೊಂದಿದೆ. ನಾನು
ಕೆಟ್ಟದ್ದನ್ನೇನೂ ಮಾಡಿಲ್ಲ! ನಾನು ಕೆಟ್ಟ ವ್ಯಕ್ತಿಯಲ್ಲ!
ಆದ್ದರಿಂದ ನಾನು ನಿನಗೆ ಕೇಡು ಮಾಡುವುದಿಲ್ಲ! 14ನೀನು
ಯಾರನ್ನು ಅಟ್ಟಿಸಿಕೊಂಡು ಹೋಗುತ್ತಿರುವೆ? ಇಸ್ರೇಲರ
ರಾಜನಾದ ನೀನು ಯಾರೊಂದಿಗೆ ಹೋರಾಡ
ಬೇಕೆಂದಿರುವೆ? ನಿನಗೆ ಕೇಡು ಮಾಡಬಹುದಾದವನನ್ನು
ನೀನು ಅಟ್ಟಿಸಿಕೊಂಡು ಹೋಗುತ್ತಿಲ್ಲ! ನೀನು ಸತ್ತ ನಾಯಿ
ಯನ್ನೋ ಇಲ್ಲವೆ ಚಿಟ್ಟೆಯನ್ನೋ ಅಟ್ಟಿಸಿಕೊಂಡು
ಹೋಗುತ್ತಿರುವೆ! 15ಯೆಹೋವನೇ ನಮ್ಮಿಬ್ಬರಿಗೂ
ನ್ಯಾಯಾಧೀಶನಾಗಿದ್ದು ತೀರ್ಪು ನೀಡಲಿ. ಯೆಹೋವನು
ನನ್ನ ಪರವಾಗಿ ವಾದಿಸಿ ನಾನು ನೀತಿವಂತನೆಂದು
ನಿರೂಪಿಸಿ ನನ್ನನ್ನು ನಿನ್ನಿಂದ ರಕ್ಷಿಸುತ್ತಾನೆ'' ಎಂದು
ಹೇಳಿದನು.

16ದಾವೀದನು ಈ ಮಾತುಗಳನ್ನು ಹೇಳಿದಾಗ
ಸೌಲನು, ''ನನ್ನ ಮಗನಾದ ದಾವೀದನೇ, ಅದು ನಿನ್ನ
ಧ್ವನಿಯೇ?'' ಎಂದು ಕೇಳಿದನು. ನಂತರ ಸೌಲನು ಅಳ
ಲಾರಂಭಿಸಿದನು. ಸೌಲನು ಬಹಳ ಅತ್ತನು. 17ಸೌಲನು,
''ನೀನೇ ನೀತಿವಂತನು. ನಾನು ತಪ್ಪು ಮಾಡಿದೆ. ನೀನು
ನನಗೆ ಒಳ್ಳೆಯವನಾಗಿದ್ದೆ; ಆದರೆ ನಾನು ನಿನಗೆ ಕೆಟ್ಟ
ವನಾದೆ. 18ನೀನು ನನಗೆ ಮಾಡಿದ ಒಳ್ಳೆಯ ಕಾರ್ಯಗಳ
ಬಗ್ಗೆ ನನಗೆ ತಿಳಿಸಿರುವೆ. ಯೆಹೋವನು ನನ್ನನ್ನು ನಿನ್ನ
ಬಳಿಗೆ ಕರೆದುತಂದನು, ಆದರೆ ನೀನು ನನ್ನನ್ನು ಕೊಲ್ಲ
ಲಿಲ್ಲ. 19ಒಬ್ಬ ಮನುಷ್ಯನು ತನ್ನ ಶತ್ರುವನ್ನು ಹಿಡಿದು
ಕೊಂಡರೆ, ಅವನಿಗೆ ಕೇಡನ್ನು ಮಾಡದೆ ಕಳುಹಿಸಿ
ಬಿಡುವನೇ? ಅವನು ಶತ್ರುವಿಗೆ ಒಳ್ಳೆಯದನ್ನು ಮಾಡುವು
ದಿಲ್ಲ. ನೀನು ನನಗೆ ಈ ದಿನ ಒಳ್ಳೆಯದನ್ನು ಮಾಡಿರುವುದ
ರಿಂದ ಯೆಹೋವನು ನಿನಗೆ ಒಳ್ಳೆಯದನ್ನು ಮಾಡಲಿ.
20ನೀನು ನೂತನ ರಾಜನಾಗುವೆಯೆಂಬುದು ನನಗೆ
ತಿಳಿದಿದೆ. ಇಸ್ರೇಲ್ ರಾಜ್ಯವನ್ನು ನೀನು ಆಳುವೆ. 21ಈಗ
ನೀನು ನನಗೆ ಒಂದು ಪ್ರಮಾಣವನ್ನು ಮಾಡು. ನನ್ನ ವಂಶ
ದವರನ್ನು ನೀನು ಕೊಲ್ಲುವುದಿಲ್ಲವೆಂದು ಯೆಹೋವನ
ಹೆಸರಿನಲ್ಲಿ ನನಗೆ ಪ್ರಮಾಣಮಾಡು. ನನ್ನ ತಂದೆಯ ಕುಲ
ದಲ್ಲಿ ನನ್ನ ಹೆಸರನ್ನು ನಾಶಮಾಡುವುದಿಲ್ಲವೆಂದು
ಪ್ರಮಾಣ ಮಾಡು'' ಎಂದನು.

22ಸೌಲನ ವಂಶದವರನ್ನು ಕೊಲ್ಲುವುದಿಲ್ಲವೆಂದು
ದಾವೀದನು ಪ್ರಮಾಣಮಾಡಿದನು. ನಂತರ ಸೌಲನು
ಮನೆಗೆ ಹಿಂದಿರುಗಿದನು. ದಾವೀದನು ಮತ್ತು ಅವನ
ಜನರು ತಾವು ಅಡಗಿಕೊಂಡಿದ್ದ ಸ್ಥಳಕ್ಕೆ ಹೊರಟು
ಹೋದರು.

### ದಾವೀದ ಮತ್ತು ನಾಬಾಲ್*

25 ಸಮುವೇಲನು ಮರಣಹೊಂದಿದನು. ಇಸ್ರೇಲ
ರೆಲ್ಲರು ಒಟ್ಟಾಗಿ ಸೇರಿ ಸಮುವೇಲನ ಮರಣ
ಕ್ಕಾಗಿ ಗೋಳಾಡಿದರು. ಅವರು ಸಮುವೇಲನನ್ನು ಅವನ
ನಿವಾಸವಿದ್ದ ರಾಮದಲ್ಲಿ ಸಮಾಧಿಮಾಡಿದರು. ನಂತರ
ದಾವೀದನು ಪಾರಾನ್ ಮರಳುಗಾಡಿಗೆ ಹೋದನು.

2ಮಾವೋನ್‌ನಲ್ಲಿ ಒಬ್ಬ ಮನುಷ್ಯನು ವಾಸಿಸು
ತ್ತಿದ್ದನು. ಈ ಮನುಷ್ಯನು ಬಹಳ ಶ್ರೀಮಂತನಾಗಿದ್ದನು.
ಅವನು ಮೂರು ಸಾವಿರ ಕುರಿಗಳನ್ನೂ ಒಂದು ಸಾವಿರ
ಆಡುಗಳನ್ನೂ ಹೊಂದಿದ್ದನು. ಅವನು ಕರ್ಮೆಲಿನಲ್ಲಿ
ವ್ಯಾಪಾರ ಮಾಡುತ್ತಿದ್ದನು. ಒಮ್ಮೆ ಅವನು ಕುರಿಗಳ ತುಪ್ಪ
ಟವನ್ನು ಕತ್ತರಿಸುವುದಕ್ಕಾಗಿ ಕರ್ಮೆಲಿಗೆ ಹೋಗಿದ್ದನು.
3ಈ ಮನುಷ್ಯನ ಹೆಸರು ನಾಬಾಲ್. ಅವನ ಹೆಂಡತಿಯ
ಹೆಸರು ಅಬೀಗೈಲ್. ಅಬೀಗೈಲಳು ಬುದ್ಧಿವಂತಳಾಗಿದ್ದಳು
ಮತ್ತು ಸುಂದರವಾಗಿದ್ದಳು. ಆದರೆ ನಾಬಾಲನು ಕ್ರೂರಿ
ಮತ್ತು ಕೀಳಾದ ವ್ಯಕ್ತಿ. ನಾಬಾಲನು ಕಾಲೇಬನ
ಕುಟುಂಬಕ್ಕೆ ಸೇರಿದವನು.

4ನಾಬಾಲನು ತನ್ನ ಕುರಿಗಳ ತುಪ್ಪಟವನ್ನು ಕತ್ತರಿ
ಸುತ್ತಿದ್ದಾನೆಂಬ ಸುದ್ದಿಯು ಮರಳುಗಾಡಿನಲ್ಲಿದ್ದ
ದಾವೀದನಿಗೆ ತಿಳಿಯಿತು. 5ಆದ್ದರಿಂದ ನಾಬಾಲನ
ಸಂಗಡ ಮಾತನಾಡಲು ದಾವೀದನು ಹತ್ತು ಜನ ಯುವಕ
ರನ್ನು ಕರೆದು ಅವರಿಗೆ, ''ಕರ್ಮೆಲಿಗೆ ಹೋಗಿ ನಾಬಾಲ
ನನ್ನು ಕಂಡುಹಿಡಿಯಿರಿ. ಅವನಿಗೆ ನನ್ನ ಪರವಾಗಿ ಶುಭ
ವನ್ನು ಕೋರಿ.'' 6ಈ ಸಂದೇಶವನ್ನು ಅವನಿಗೆ ಹೇಳಿರಿ:
''ನೀನು ಮತ್ತು ನಿನ್ನ ಕುಟುಂಬದವರು ಕ್ಷೇಮವಾಗಿದ್ದೀ
ರೆಂದು ನಾನು ನಂಬಿದ್ದೇನೆ. ನಿನ್ನ ಸಕಲ ಸಂಪತ್ತು ಚೆನ್ನಾಗಿ
ರುವುದೆಂದು ನಾನು ನಂಬಿದ್ದೇನೆ. 7ನೀನು ನಿನ್ನ ಕುರಿಗಳ
ತುಪ್ಪಟವನ್ನು ಕತ್ತರಿಸುತ್ತಿರುವುದು ನನಗೆ ತಿಳಿಯಿತು. ನಿನ್ನ
ಕುರುಬರು ನಮ್ಮೊಡನೆ ಸ್ವಲ್ಪ ಸಮಯವಿದ್ದರು. ನಾವು
ಅವರಿಗೆ ಕೆಟ್ಟದ್ದೇನನ್ನೂ ಮಾಡಲಿಲ್ಲ. ಅವರು ಕರ್ಮೆಲಿ
ನಲ್ಲಿ ಸ್ವಲ್ಪ ಸಮಯವಿದ್ದಾಗ ನಾವು ಅವರಿಂದ ಏನನ್ನೂ
ತೆಗೆದುಕೊಳ್ಳಲಿಲ್ಲ. 8ನಿನ್ನ ಸೇವಕರನ್ನು ಕೇಳು, ಇದು ನಿಜ
ವೆಂಬುದನ್ನು ಅವರು ನಿನಗೆ ತಿಳಿಸುತ್ತಾರೆ. ನನ್ನ ಯುವಕರ
ಬಗ್ಗೆ ದಯವಿಟ್ಟು ದಯಾಳುವಾಗಿರು . ಈ ಶುಭಸಂದರ್ಭ
ದಲ್ಲಿ ನಾವು ನಿಮ್ಮ ಹತ್ತಿರಕ್ಕೆ ಬರುತ್ತೇವೆ. ಸ್ನೇಹಿತನಾದ*
ದಾವೀದನಿಗಾಗಿ ನಿನಗೆ ಸಾಧ್ಯವಿದ್ದಷ್ಟನ್ನು ದಯವಿಟ್ಟು ಈ
ಯುವಕರಿಗೆ ಕೊಡು'' ಎಂದು ಹೇಳಿ ಕಳುಹಿಸಿದನು.

---

**ನಾಬಾಲ್** ಈ ಹೆಸರಿಗೆ ''ದುಷ್ಟ'' ಎಂದರ್ಥ.

**ಸ್ನೇಹಿತ** ಅಕ್ಷರಶಃ ''ಮಗ.''

9ದಾವೀದನ ಜನರು ನಾಬಾಲನ ಬಳಿಗೆ ಹೋಗಿ ಈ
ಸಂದೇಶವನ್ನು ತಿಳಿಸಿದರು. 10ಆದರೆ ನಾಬಾಲನು
ಅವರನ್ನು ಕೀಳಾಗಿ ಕಂಡು, ‘‘ದಾವೀದನು ಯಾರು? ಈ
ಇಷಯನ ಮಗನೆಂಬವನು ಯಾರು? ಇತ್ತೀಚಿನ ದಿನ
ಗಳಲ್ಲಿ ತಮ್ಮ ಒಡೆಯರ ಹತ್ತಿರದಿಂದ ಓಡಿ ಹೋಗಿರುವ
ಅನೇಕ ಗುಲಾಮರುಗಳಿದ್ದಾರೆ! 11ನನ್ನ ಬಳಿ ನೀರು
ಮತ್ತು ರೊಟ್ಟಿಗಳಿವೆ. ನನ್ನ ಕುರಿಗಳಿಂದ ತುಪ್ಪಟವನ್ನು
ಕತ್ತರಿಸುತ್ತಿರುವ ಸೇವಕರಿಗೋಸ್ಕರ ಮಾಂಸವೂ ನನ್ನ
ಲ್ಲಿದೆ. ಆದರೆ ನನಗೆ ಗೊತ್ತಿಲ್ಲದ ಜನರಿಗೆ ನಾನು
ಕೊಡುವುದೇ ಇಲ್ಲ!’’ಎಂದು ಹೇಳಿದನು.

12ದಾವೀದನ ಜನರು ಹಿಂತಿರುಗಿ ಹೋಗಿ ನಾಬಾಲನು
ಹೇಳಿದ್ದನ್ನೆಲ್ಲಾ ದಾವೀದನಿಗೆ ತಿಳಿಸಿದರು. 13ಆಗ
ದಾವೀದನು ತನ್ನ ಜನರಿಗೆ, ‘‘ನಿಮ್ಮ ಆಯುಧಗಳನ್ನು
ಸೊಂಟಕ್ಕೆ ಕಟ್ಟಿಕೊಳ್ಳಿ!’’ ಎಂದು ಹೇಳಿದನು. ದಾವೀದನು
ಮತ್ತು ಅವನ ಜನರು ಆಯುಧಗಳನ್ನು ಕಟ್ಟಿಕೊಂಡರು.
ದಾವೀದನ ಸಂಗಡ ಸುಮಾರು ನಾನೂರು ಜನರು
ಹೋದರು; ಇನ್ನೂರು ಜನರು ಸರಕುಗಳ ಬಳಿಯಲ್ಲಿ
ಉಳಿದುಕೊಂಡರು.

### ಅಬೀಗೈಲಳು ಕೇಡಿನಿಂದ ತಪ್ಪಿಸುವಳು

14ನಾಬಾಲನ ಸೇವಕನೊಬ್ಬನು ನಾಬಾಲನ ಹೆಂಡತಿ
ಯಾದ ಅಬೀಗೈಲಳಿಗೆ, ‘‘ನಮ್ಮ ಒಡೆಯನನ್ನು ವಂದಿಸಲು
ದಾವೀದನು ಅರಣ್ಯದಿಂದ ಸಂದೇಶಕರನ್ನು ಕಳುಹಿಸಿ
ದ್ದನು. ಆದರೆ ನಾಬಾಲನು ದಾವೀದನ ಸಂದೇಶಕ
ರೊಂದಿಗೆ ಕೀಳಾಗಿ ನಡೆದುಕೊಂಡನು. 15ಈ ಜನರು
ನಮಗೆ ಬಹಳ ಒಳ್ಳೆಯವರಾಗಿದ್ದರು. ನಾವು ಆಡುಗ
ಳೊಂದಿಗೆ ಹೊಲಗಳಿಗೆ ಹೋಗಿದ್ದಾಗ ದಾವೀದನ ಜನರು
ಆ ಸಮಯದಲ್ಲೆಲ್ಲ ನಮ್ಮ ಜೊತೆಗಿದ್ದರು! ಅವರು ನಮಗೆ
ಯಾವುದೇ ಕೆಡುಕನ್ನು ಮಾಡಲಿಲ್ಲ! ಅವರು ನಮ್ಮೊಂದಿ
ಗಿದ್ದ ಸಮಯದಲ್ಲೆಲ್ಲ ನಮ್ಮಿಂದ ಏನನ್ನೂ ಕದಿಯಲಿಲ್ಲ!
16ನಾವು ಕುರಿಗಳನ್ನು ಕಾಯುತ್ತಿದ್ದಾಗ ದಾವೀದನ ಜನರು
ನಮ್ಮನ್ನು ಹಗಲುರಾತ್ರಿ ರಕ್ಷಿಸಿದರು! ಅವರು ನಮ್ಮ
ಸುತ್ತಲೂ ಗೋಡೆಯಂತಿದ್ದರು. 17ಈಗ ಅದರ ಬಗ್ಗೆ
ಯೋಚಿಸಿ ನೀನು ಮಾಡಬೇಕಾದದ್ದನ್ನು ತೀರ್ಮಾನಿಸು.
ನಾಬಾಲನು ಮೂರ್ಖ. ಅವನೊಂದಿಗೆ ಮಾತಾಡಿ ಅವನ
ಮನಸ್ಸನ್ನು ಬದಲಾಯಿಸುವುದು ಅಸಾಧ್ಯ. ನಮ್ಮ ಒಡೆಯ
ನಿಗೂ ಅವನ ಕುಟುಂಬಕ್ಕೂ ಭೀಕರವಾದ ಕೇಡು
ಬರಲಿದೆ’’ಎಂದು ಹೇಳಿದನು.

18ಅಬೀಗೈಲಳು ಇನ್ನೂರು ರೊಟ್ಟಿಗಳನ್ನೂ ಎರಡು
ದ್ರಾಕ್ಷಾರಸದ ಚೀಲಗಳನ್ನೂ ಐದು ಕುರಿಗಳ ಬೇಯಿಸಿದ
ಮಾಂಸವನ್ನೂ ಹದಿನೇಳು ಕಿಲೋ ಗ್ರಾಂ ಬೇಯಿಸಿದ
ಕಾಳನ್ನೂ ನೂರು ಗೊಂಚಲು ಒಣದ್ರಾಕ್ಷಿಯನ್ನೂ
ಅಂಜೂರ ಹಣ್ಣಿನ ಇನ್ನೂರು ಉಂಡೆಗಳನ್ನೂ ತ್ವರಿತವಾಗಿ
ತೆಗೆದುಕೊಂಡಳು. ಅವಳು ಅವುಗಳನ್ನು ಹೇಸರಕತ್ತೆಗಳ
ಮೇಲೆ ಹೇರಿದಳು. 19ನಂತರ ಅಬೀಗೈಲಳು ತನ್ನ ಸೇವಕ
ರಿಗೆ, ‘‘ಮುಂದೆ ನಡೆಯಿರಿ, ನಾನು ನಿಮ್ಮ ಹಿಂದೆ
ಬರುತ್ತೇನೆ’’ ಎಂದಳು. ಆದರೆ ಅವಳು ತನ್ನ ಗಂಡನಿಗೆ
ಹೇಳಲಿಲ್ಲ.

20ಅಬೀಗೈಲಳು ಹೇಸರಕತ್ತೆಯ ಮೇಲೆ ಸವಾರಿ
ಮಾಡುತ್ತಾ ಬೆಟ್ಟದ ಮತ್ತೊಂದು ಕಡೆಗೆ ಬಂದು
ಬೇರೊಂದು ದಿಕ್ಕಿನಿಂದ ಬರುತ್ತಿದ್ದ ದಾವೀದನನ್ನೂ
ಅವನ ಜನರನ್ನೂ ಸಂಧಿಸಿದಳು.

21ಅಬೀಗೈಲಳನ್ನು ಸಂಧಿಸುವುದಕ್ಕೆ ಮುಂಚೆ
ದಾವೀದನು, ‘‘ನಾಬಾಲನ ಆಸ್ತಿಯನ್ನು ನಾನು ಅರಣ್ಯ
ದಲ್ಲಿ ಕಾಪಾಡಿದೆನು. ಅವನ ಕುರಿಗಳಲ್ಲಿ ಒಂದೂ ತಪ್ಪಿಸಿ
ಕೊಳ್ಳದಂತೆ ನಾನು ನೋಡಿಕೊಂಡೆನು. ನಾನು ಅವನಿಂದ
ಏನನ್ನೂ ಅಪೇಕ್ಷಿಸದೆ ಇದನ್ನೆಲ್ಲ ಮಾಡಿದೆ! ನಾನು ಅವನಿಗೆ
ಒಳ್ಳೆಯದನ್ನು ಮಾಡಿದೆ; ಆದರೆ ಅವನು ನನಗೆ ಕೆಟ್ಟವ
ನಾದನು. 22ನಾಳೆ ಬೆಳಗಾಗುವುದರೊಳಗಾಗಿ ನಾಬಾಲನ
ಕುಟುಂಬದಲ್ಲಿ ಒಬ್ಬರಾದರೂ ಜೀವದಿಂದ ಉಳಿದು
ಕೊಳ್ಳಲು ನಾನು ಅವಕಾಶಕೊಟ್ಟರೆ ದೇವರು ನನ್ನನ್ನು
ದಂಡಿಸಲಿ’’ ಎಂದು ಹೇಳಿದ್ದನು.

23ಅಬೀಗೈಲಳು ದಾವೀದನನ್ನು ಕಂಡ ಕೂಡಲೇ
ಕತ್ತೆಯಿಂದ ಬೇಗನೆ ಇಳಿದು ದಾವೀದನಿಗೆ ಸಾಷ್ಟಾಂಗ
ನಮಸ್ಕಾರ ಮಾಡಿದಳು. 24ಅಬೀಗೈಲಳು ದಾವೀದನ
ಪಾದಗಳಿಗೆ ಬಿದ್ದು, ‘‘ಒಡೆಯನೇ, ನಿನ್ನೊಂದಿಗೆ ಮಾತ
ನಾಡಲು ದಯವಿಟ್ಟು ನನಗೆ ಅವಕಾಶ ಕೊಡು. ನಾನು
ಹೇಳುವುದನ್ನು ಆಲಿಸು. ನಡೆದುಹೋದ ಸಂಗತಿಗೆ
ನನ್ನನ್ನೇ ನಿಂದಿಸು. 25ನೀನು ಕಳುಹಿಸಿದ ಜನರನ್ನು ನಾನು
ನೋಡಲಿಲ್ಲ. ಒಡೆಯನೇ, ಮೂರ್ಖನಾದ ಆ ಮನುಷ್ಯನ
ಮೇಲೆ ಯಾವ ಲಕ್ಷ್ಯವನ್ನೂ ಇಡಬೇಡ. ಅವನು ತನ್ನ
ಹೆಸರಿಗೆ ತಕ್ಕಂತೆ ಇದ್ದಾನೆ. ಅವನ ಹೆಸರಿನ ಅರ್ಥವೂ
‘ಮೂರ್ಖ’ ಮತ್ತು ಅವನು ನಿಜವಾಗಿಯೂ ಮೂರ್ಖ.
26ಮುಗ್ಧಜನರನ್ನು ಕೊಂದು ಅಪರಾಧಿಯಾಗದಂತೆ
ಯೆಹೋವನು ನಿನ್ನನ್ನು ಕಾಪಾಡಿದ್ದಾನೆ. ಯೆಹೋವನ
ಆಣೆಯಾಗಿಯೂ ನಿನ್ನ ಆಣೆಯಾಗಿಯೂ ನಿನ್ನ ಶತ್ರು
ಗಳೂ ನಿನಗೆ ಕೇಡುಮಾಡುವವರೂ ನಾಬಾಲ
ನಂತಾಗಲಿ. 27ಈಗ ನಾನು ನಿನಗಾಗಿ ಈ ಕೊಡುಗೆಗಳನ್ನು
ತಂದಿದ್ದೇನೆ. ನಿನ್ನನ್ನು ಹಿಂಬಾಲಿಸುತ್ತಿರುವ ನಿನ್ನ ಸೇವ
ಕರಿಗೆ ದಯವಿಟ್ಟು ಇವುಗಳನ್ನು ಕೊಡು. 28ನಾನು
ಮಾಡಿದ ತಪ್ಪನ್ನು ದಯವಿಟ್ಟು ಕ್ಷಮಿಸು. ಯೆಹೋವನು
ನಿನ್ನ ಕುಟುಂಬವನ್ನು ಪ್ರಬಲಗೊಳಿಸುತ್ತಾನೆಂದೂ ನಿನ್ನ
ಕುಟುಂಬದಿಂದ ಅನೇಕ ರಾಜರು ಬರುತ್ತಾರೆಂದೂ
ನನಗೆ ತಿಳಿದಿದೆ! ನೀನು ಯೆಹೋವನ ಯುದ್ಧಗಳಲ್ಲಿ
ಹೋರಾಡುವುದರಿಂದ ಯೆಹೋವನು ಇದನ್ನು ನೆರ
ವೇರಿಸುತ್ತಾನೆ. ನೀನು ಜೀವಿಸಿರುವ ತನಕ ಜನರು ನಿನ್ನಲ್ಲಿ

ಯಾವುದೇ ಬಗೆಯ ಕೆಟ್ಟದನ್ನು ಕಂಡುಹಿಡಿಯುವುದಿಲ್ಲ!
[29]ನಿನ್ನನ್ನು ಕೊಲ್ಲಲು ಒಬ್ಬ ವ್ಯಕ್ತಿಯು ಅಟ್ಟಿಸಿಕೊಂಡು
ಬಂದರೆ, ನಿನ್ನ ದೇವರಾದ ಯೆಹೋವನು ನಿನ್ನ ಜೀವ
ವನ್ನು ರಕ್ಷಿಸುತ್ತಾನೆ! ಆದರೆ ಯೆಹೋವನು ನಿನ್ನ ಶತ್ರು
ಗಳನ್ನು ಕವಣೆಯ ಕಲ್ಲನ್ನು ಎಸೆಯುವಂತೆ ಎಸೆದುಬಿಡು
ತ್ತಾನೆ! [30]ನಿನಗಾಗಿ ಅನೇಕ ಒಳ್ಳೆಯ ಕಾರ್ಯಗಳನ್ನು
ಮಾಡುವುದಾಗಿ ಯೆಹೋವನು ವಾಗ್ದಾನ ಮಾಡಿದ್ದಾನೆ.
ಯೆಹೋವನು ತನ್ನ ಎಲ್ಲ ವಾಗ್ದಾನಗಳನ್ನೂ ನೆರವೇರಿಸು
ತ್ತಾನೆ! ದೇವರು ನಿನ್ನನ್ನು ಇಸ್ರೇಲರ ನಾಯಕನನ್ನಾಗಿ
ಮಾಡಿದಾಗ [31]ನಿರಪರಾಧಿಗಳ ರಕ್ತವನ್ನು ಸುರಿಸಿದ ಅಪ
ರಾಧಕ್ಕೆ ನೀನು ಗುರಿಯಾಗುವುದಿಲ್ಲ; ನೀನು ಆ ಬಲೆಗೂ
ಬೀಳುವುದಿಲ್ಲ. ನೀನು ಆ ಮಹಾಪದವಿಗೆ ಬಂದಾಗ
ನನ್ನನ್ನು ಮರೆತು ಬಿಡಬೇಡ’’ ಎಂದು ಹೇಳಿದಳು.
[32]ದಾವೀದನು ಅಬೀಗೈಲಳಿಗೆ, ‘‘ಇಸ್ರೇಲರ ದೇವ
ರಾದ ಯೆಹೋವನಿಗೆ ಸ್ತೋತ್ರವಾಗಲಿ. ದೇವರೇ ನಿನ್ನನ್ನು
ನನ್ನ ಬಳಿಗೆ ಕಳುಹಿಸಿದ್ದಾನೆ. [33]ನಿನ್ನ ಒಳ್ಳೆಯ ತೀರ್ಪಿಗಾಗಿ
ದೇವರು ನಿನ್ನನ್ನು ಆಶೀರ್ವದಿಸಲಿ. ಈ ದಿನ ನಾನು
ನಿರ್ದೋಷಿಗಳನ್ನು ಕೊಲ್ಲದಂತೆ ನೀನು ನನ್ನನ್ನು ತಡೆದೆ.
[34]ಇಸ್ರೇಲರ ದೇವರಾದ ಯೆಹೋವನಾಣೆ, ನೀನು
ನನ್ನನ್ನು ಸಂಧಿಸಲು ಬೇಗನೆ ಬರದಿದ್ದರೆ ನಾಳೆ ಹೊತ್ತಾ
ರೆಯ ವೇಳೆಗೆ ನಾಬಾಲನ ಕುಟುಂಬದಲ್ಲಿ ಒಬ್ಬನೂ
ಜೀವಸಹಿತ ಉಳಿಯುತ್ತಿರಲಿಲ್ಲ’’ ಎಂದು ಹೇಳಿದನು.
[35]ನಂತರ ದಾವೀದನು ಅಬೀಗೈಲಳ ಕೊಡುಗೆಗಳನ್ನು
ಸ್ವೀಕರಿಸಿ ಆಕೆಗೆ, ‘‘ಶಾಂತಿಯಿಂದ ಮನೆಗೆ ಹಿಂದಿರುಗು.
ನಾನು ನಿನ್ನ ಮಾತುಗಳನ್ನು ಆಲಿಸಿದ್ದೇನೆ ಮತ್ತು ನೀನು
ಕೇಳಿಕೊಂಡಿರುವುದನ್ನು ನೆರವೇರಿಸುತ್ತೇನೆ’’ ಎಂದು
ಹೇಳಿದನು.

### ನಾಬಾಲನ ಮರಣ

[36]ಅಬೀಗೈಲಳು ನಾಬಾಲನ ಬಳಿಗೆ ಹಿಂದಿರುಗಿ
ಹೋದಳು. ನಾಬಾಲನು ಮನೆಯಲ್ಲಿಯೇ ಇದ್ದನು.
ನಾಬಾಲನು ರಾಜನಂತೆ ತಿನ್ನುತ್ತಾ ಕುಡಿದು ಮತ್ತ
ನಾಗಿದ್ದನು. ಆದ್ದರಿಂದ ಅಬೀಗೈಲಳು ಮಾರನೆಯ ದಿನದ
ಹೊತ್ತಾರೆಯವರೆಗೆ ನಾಬಾಲನಿಗೆ ಏನನ್ನೂ ಹೇಳಲಿಲ್ಲ.
[37]ಮಾರನೆಯ ದಿನ ನಾಬಾಲನ ಮತ್ತಿಳಿದಿತ್ತು. ಅವನ
ಹೆಂಡತಿಯು ಅವನಿಗೆ ಎಲ್ಲವನ್ನು ತಿಳಿಸಿದಳು. ನಾಬಾಲ
ನಿಗೆ ಹೃದಯಾಘಾತವಾಯಿತು. ಅವನು ಸ್ತಬ್ಧನಾದನು.
[38]ಹತ್ತು ದಿನಗಳಾದ ಮೇಲೆ, ಯೆಹೋವನು
ನಾಬಾಲನಿಗೆ ಸಾವನ್ನು ಬರಮಾಡಿದನು.
[39]ನಾಬಾಲನು ಸತ್ತನೆಂಬುದು ದಾವೀದನಿಗೆ ತಿಳಿ
ಯಿತು. ದಾವೀದನು, ‘‘ಯೆಹೋವನಿಗೆ ಸ್ತೋತ್ರವಾಗಲಿ!
ನಾಬಾಲನು ನನ್ನ ಬಗ್ಗೆ ಕೆಟ್ಟ ಮಾತುಗಳನ್ನು ಆಡಿದನು,
ಆದರೆ ಯೆಹೋವನು ನನಗೆ ಸಹಾಯ ಮಾಡಿದನು.
ನಾನು ತಪ್ಪುಮಾಡದಂತೆ ಯೆಹೋವನು ನನ್ನನ್ನು
ತಡೆದನು. ನಾಬಾಲನು ಕೆಟ್ಟದನ್ನು ಮಾಡಿದ್ದರಿಂದ
ಯೆಹೋವನು ಅವನಿಗೆ ಸಾವನ್ನು ಬರಮಾಡಿದನು’’
ಎಂದು ಹೇಳಿದನು.
ನಂತರ ದಾವೀದನು ಅಬೀಗೈಲಳಿಗೆ ಒಂದು ಸಂದೇಶ
ವನ್ನು ಕಳುಹಿಸಿ ತನ್ನ ಹೆಂಡತಿಯಾಗಬೇಕೆಂದು ಕೇಳಿ
ಕೊಂಡನು. [40]ದಾವೀದನ ಸೈನಿಕರು ಕರ್ಮೆಲಿಗೆ ಹೋಗಿ
ಅಬೀಗೈಲಳಿಗೆ, ‘‘ದಾವೀದನು ನಿನ್ನನ್ನು ಕರೆತರಲು ಹೇಳಿ
ದ್ದಾನೆ. ನಿನ್ನನ್ನು ತನ್ನ ಹೆಂಡತಿಯನ್ನಾಗಿ ಸ್ವೀಕರಿಸಿಕೊಳ್ಳ
ಬೇಕೆಂಬುದು ದಾವೀದನ ಅಪೇಕ್ಷೆ’’ಎಂದು ಹೇಳಿದರು.
[41]ಅಬೀಗೈಲಳು ಸಾಷ್ಟಾಂಗ ನಮಸ್ಕಾರಮಾಡಿ, ‘‘ನಾನು
ನಿಮ್ಮ ದಾಸಿ. ನಾನು ನಿಮ್ಮ ಸೇವೆಗೆ ಸಿದ್ಧಳಾಗಿದ್ದೇನೆ. ನಾನು
ನನ್ನ ಒಡೆಯನ ಸೇವಕರ ಪಾದಗಳನ್ನು ತೊಳೆಯಲು ಸಿದ್ಧ
ಳಾಗಿರುವೆ’’ ಎಂದಳು.
[42]ಅಬೀಗೈಲಳು ಬೇಗನೆ ಒಂದು ಕತ್ತೆಯ ಮೇಲೇರಿ,
ದಾವೀದನ ಸಂದೇಶಕರೊಂದಿಗೆ ಹೊರಟು ಹೋದಳು.
ಅಬೀಗೈಲಳು ಐದು ಜನ ಸೇವಕಿಯರನ್ನು ತನ್ನೊಂದಿಗೆ
ಕರೆದುಕೊಂಡು ಹೋದಳು. ಅವಳು ದಾವೀದನ
ಹೆಂಡತಿಯಾದಳು.
[43]ದಾವೀದನು ಇಜ್ರೇಲಿನವಳಾದ ಅಹೀನೋವ
ಮಳನ್ನು ಸಹ ಮದುವೆಯಾದನು. ಅಹೀನೋವಮಳು
ಮತ್ತು ಅಬೀಗೈಲರಿಬ್ಬರೂ ದಾವೀದನ ಪತ್ನಿಯರು.
[44]ಸೌಲನ ಮಗಳಾದ ಮೀಕಲಳೂ ದಾವೀದನ ಪತ್ನಿ.
ಆದರೆ ಸೌಲನು ಅವಳನ್ನು ಗಲ್ಲೀಮ್‌ನ ಲಯಿಷನ
ಮಗನಾದ ಪಲ್ಟೀ ಎಂಬವನಿಗೆ ಮದುವೆ ಮಾಡಿಕೊಟ್ಟನು.

### ದಾವೀದ ಮತ್ತು ಅಬೀಷೈ ಸೌಲನ ಪಾಳೆಯವನ್ನು ಪ್ರವೇಶಿಸುವರು

26 ಜೀಫಿನ ಜನರು ಸೌಲನನ್ನು ನೋಡು
ವುದಕ್ಕಾಗಿ ಗಿಬೆಯಕ್ಕೆ ಹೋದರು. ಅವರು
ಸೌಲನಿಗೆ, ‘‘ದಾವೀದನು ಹಕೀಲಾ ಬೆಟ್ಟದ ಮೇಲೆ ಅಡಗಿ
ಕೊಂಡಿದ್ದಾನೆ. ಈ ಬೆಟ್ಟವು ಜೆಸಿಮೋನನ ದಾರಿಯಲ್ಲಿದೆ’’
ಎಂದು ಹೇಳಿದರು.
[2]ಸೌಲನು ಜೀಫ್ ಅರಣ್ಯಕ್ಕೆ ಹೋದನು. ಇಸ್ರೇಲಿನ
ಲ್ಲೆಲ್ಲಾ ತಾನೇ ಆರಿಸಿದ ಮೂರು ಸಾವಿರ ಜನ ಸೈನಿಕರನ್ನು
ಸೌಲನು ತನ್ನೊಡನೆ ಕರೆದುಕೊಂಡು ಹೋದನು.
ಸೌಲನು ಮತ್ತು ಅವನ ಜನರು ದಾವೀದನನ್ನು ಜೀಫ್
ಅರಣ್ಯದಲ್ಲಿ ಹುಡುಕಿದರು. [3]ಸೌಲನು ಹಕೀಲಾ ಬೆಟ್ಟದ
ಮೇಲೆ ತನ್ನ ಪಾಳೆಯವನ್ನು ಮಾಡಿಕೊಂಡನು. ಈ
ಪಾಳೆಯವು ಜೆಸಿಮೋನನ ಮಾರ್ಗದಲ್ಲಿ ರಸ್ತೆಯ
ಅಂಚಿನಲ್ಲಿತ್ತು.
ದಾವೀದನು ಅರಣ್ಯದಲ್ಲಿ ನೆಲೆಸಿದ್ದನು. ಸೌಲನು
ತನ್ನನ್ನು ಹಿಂಬಾಲಿಸಿಕೊಂಡು ಅಲ್ಲಿಗೆ ಬಂದಿರುವುದು

ದಾವೀದನಿಗೆ ತಿಳಿಯಿತು. [4]ಆಗ ದಾವೀದನು ಗೂಢಚಾರ
ರನ್ನು ಕಳುಹಿಸಿದನು. ಸೌಲನು ಹಕೀಲಾಕ್ಕೆ ಬಂದಿರು
ವುದು ದಾವೀದನಿಗೆ ತಿಳಿಯಿತು. [5]ಸೌಲನು ಪಾಳೆಯ
ಮಾಡಿಕೊಂಡಿದ್ದ ಸ್ಥಳಕ್ಕೆ ದಾವೀದನು ಹೋಗಿ ಸೌಲನು
ಮತ್ತು ಅಬ್ನೇರನು ಮಲಗಿರುವ ಸ್ಥಳವನ್ನು ನೋಡಿ
ಕೊಂಡನು. (ನೇರನ ಮಗನಾದ ಅಬ್ನೇರನು ಸೌಲನ
ಸೈನ್ಯದಲ್ಲಿ ಸೇನಾಪತಿಯಾಗಿದ್ದನು.) ಸೌಲನು ಪಾಳೆಯದ
ಮಧ್ಯದಲ್ಲಿ ಮಲಗಿದ್ದನು. ಸೌಲನ ಸುತ್ತ ಸೈನ್ಯವೆಲ್ಲವೂ
ಇದ್ದಿತು.

[6]ದಾವೀದನು ಹಿತ್ತಿಯನಾದ ಅಹೀಮೆಲೆಕನ ಮತ್ತು
ಚೆರೂಯಳ ಮಗನಾದ ಅಬೀಷೈರೊಡನೆ ಮಾತನಾಡಿ
ದನು. (ಅಬೀಷೈಯು ಯೋವಾಬನ ಸೋದರ.) ಅವನು
ಅವರಿಗೆ, ‘‘ನನ್ನೊಡನೆ ಸೌಲನ ಪಾಳೆಯಕ್ಕೆ ಯಾರು
ಬರುತ್ತೀರಿ?’’ಎಂದು ಕೇಳಿದನು.

‘‘ನಾನು ಬರುತ್ತೇನೆ’’ಎಂದು ಅಬೀಷೈ ಉತ್ತರಿಸಿದನು.

[7]ರಾತ್ರಿಯಾಯಿತು. ದಾವೀದ ಮತ್ತು ಅಬೀಷೈ ಸೌಲನ
ಪಾಳೆಯಕ್ಕೆ ಹೋದರು. ಪಾಳೆಯದ ಮಧ್ಯದಲ್ಲಿ ಸೌಲನು
ನಿದ್ರಿಸುತ್ತಿದ್ದನು. ಅವನ ಬರ್ಜಿಯು ಅವನ ತಲೆಯ ಹತ್ತಿರ
ನೆಲದಲ್ಲಿ ನೆಡಲ್ಪಟ್ಟಿತ್ತು. ಸೌಲನ ಸುತ್ತಲೂ ಅಬ್ನೇರನು
ಸೈನ್ಯದೊಡನೆ ನಿದ್ರಿಸುತ್ತಿದ್ದನು. [8]ಅಬೀಷೈಯು,
’’ಯೆಹೋವನು ಈ ದಿನ ನಿನ್ನ ಶತ್ರುವನ್ನು ಸೋಲಿಸಲು
ನಿನಗೆ ಒಪ್ಪಿಸಿದ್ದಾನೆ. ಸೌಲನನ್ನು ಅವನ ಭರ್ಜಿಯಿಂದಲೇ
ಅವನನ್ನು ನೆಲಕ್ಕೆ ಹತ್ತಿಕೊಳ್ಳುವಂತೆ ತಿವಿಯಲು ನನಗೆ
ಅವಕಾಶಕೊಡು. ನಾನು ಒಂದೇ ಸಲಕ್ಕೆ ಆ ಕಾರ್ಯವನ್ನು
ಮುಗಿಸಿಬಿಡುತ್ತೇನೆ!’’ ಎಂದು ದಾವೀದನನ್ನು ಕೇಳಿದನು.

[9]ಆದರೆ ದಾವೀದನು ಅಬೀಷೈಗೆ, ‘‘ಸೌಲನನ್ನು ಕೊಲ್ಲ
ಬೇಡ! ಯೆಹೋವನಿಂದ ಅಭಿಷೇಕಿಸಲ್ಪಟ್ಟ ರಾಜನಿಗೆ
ಯಾರೇ ಕೇಡು ಮಾಡಿದರೂ ಅವರನ್ನು ದಂಡಿಸಲೇ
ಬೇಕು! [10]ಯೆಹೋವನಾಣೆ, ಸೌಲನನ್ನು ಸ್ವತಃ
ಯೆಹೋವನೇ ದಂಡಿಸುತ್ತಾನೆ. ಸೌಲನು ಸ್ವಾಭಾವಿಕ
ವಾದ ಮರಣಹೊಂದಬಹುದು ಅಥವಾ ಯುದ್ಧದಲ್ಲಿ
ಕೊಲ್ಲಲ್ಪಡಬಹುದು. [11]ಆದರೆ ಯೆಹೋವನಿಂದ ಅಭಿ
ಷೇಕಿಸಲ್ಪಟ್ಟ ರಾಜನನ್ನು ನಾನು ಕೊಲ್ಲುವಂತಹ ಪರಿಸ್ಥಿತಿ
ಯನ್ನು ಎಂದಿಗೂ ನನಗೆ ಕೊಡದಂತೆ ಯೆಹೋವನಲ್ಲಿ
ಪ್ರಾರ್ಥಿಸುತ್ತೇನೆ! ಈಗ ಸೌಲನ ತಲೆಯ ಹತ್ತಿರವಿರುವ
ಭರ್ಜಿಯನ್ನೂ ನೀರಿನ ತಂಬಿಗೆಯನ್ನೂ ತೆಗೆದುಕೊಂಡ
ನಂತರ ನಾವು ಹೋಗೋಣ’’ ಎಂದು ಹೇಳಿದನು.

[12]ಅಂತೆಯೇ, ಸೌಲನ ತಲೆಯ ಹತ್ತಿರವಿದ್ದ ಭರ್ಜಿ
ಯನ್ನೂ ನೀರಿನ ತಂಬಿಗೆಯನ್ನೂ ದಾವೀದನು ತೆಗೆದು
ಕೊಂಡನು. ನಂತರ ದಾವೀದ ಮತ್ತು ಅಬೀಷೈ ಸೌಲನ
ಪಾಳೆಯವನ್ನು ಬಿಟ್ಟುಹೋದರು. ಇದನ್ನು ಯಾರೂ
ನೋಡಲಿಲ್ಲ. ಇದರ ಬಗ್ಗೆ ಯಾರಿಗೂ ತಿಳಿಯಲಿಲ್ಲ.
ಒಬ್ಬನಾದರೂ ನಿದ್ರೆಯಿಂದ ಎಚ್ಚರಗೊಳ್ಳಲಿಲ್ಲ! ಸೌಲನು
ಮತ್ತು ಅವನ ಸೈನಿಕರೆಲ್ಲರೂ ನಿದ್ರಿಸುತ್ತಿದ್ದರು. ಏಕೆಂದರೆ
ಯೆಹೋವನು ಅವರಿಗೆ ಗಾಢನಿದ್ರೆಯನ್ನು ಬರ
ಮಾಡಿದ್ದನು.

## ದಾವೀದನು ಸೌಲನಿಗೆ ಮತ್ತೆ ಅವಮಾನ ಮಾಡುವನು

[13]ದಾವೀದನು ಕಣಿವೆಯ ಮತ್ತೊಂದು ಕಡೆಗೆ ಹೋಗಿ
ಬೆಟ್ಟದ ತುದಿಯಲ್ಲಿ ನಿಂತುಕೊಂಡನು. ದಾವೀದನ
ಮತ್ತು ಸೌಲನ ಪಾಳೆಯಗಳಿಗೆ ತುಂಬಾ ಅಂತರವಿತ್ತು.
[14]ದಾವೀದನು ಸೌಲನ ಸೈನ್ಯವನ್ನೂ ನೇರನ ಮಗನಾದ
ಅಬ್ನೇರನನ್ನೂ ಉದ್ದೇಶಿಸಿ, ‘‘ಅಬ್ನೇರನೇ, ನನಗೆ
ಉತ್ತರಿಸು’’ ಎಂದು ಕೂಗಿಕೊಂಡನು.

ಅಬ್ನೇರನು, ‘‘ನೀನು ಯಾರು? ರಾಜನನ್ನು ನೀನು
ಕರೆಯುತ್ತಿರುವುದೇಕೆ?’’ಎಂದು ಕೇಳಿದನು.

[15]ದಾವೀದನು, ‘‘ನೀನು ಶೂರನಲ್ಲವೇ? ಇಸ್ರೇಲಿನ
ಲ್ಲಿನ ಇತರ ಶೂರರಿಗಿಂತಲೂ ನೀನು ಉತ್ತಮನಲ್ಲವೇ?
ಹೀಗಿರುವಾಗ ನೀನು ನಿನ್ನ ಒಡೆಯನಾದ ರಾಜನನ್ನು ಏಕೆ
ರಕ್ಷಿಸಲಿಲ್ಲ? ಒಬ್ಬ ಸಾಮಾನ್ಯ ಮನುಷ್ಯನು ನಿಮ್ಮ
ಪಾಳೆಯಕ್ಕೆ ಬಂದಿದ್ದರೂ ನಿಮ್ಮ ಒಡೆಯನಾದ ರಾಜನನ್ನು
ಕೊಲ್ಲುತ್ತಿದ್ದನು. [16]ನೀನು ದೊಡ್ಡ ತಪ್ಪನ್ನು ಮಾಡಿದೆ!
ಯೆಹೋವನಾಣೆ, ನೀನು ಮತ್ತು ನಿನ್ನ ಜನರು ಸಾಯಲೇ
ಬೇಕಾಗಿತ್ತು. ಏಕೆನ್ನುವಿಯೊ? ಯೆಹೋವನಿಂದ
ಅಭಿಷೇಕ್ತಿಸಲ್ಪಟ್ಟ ರಾಜನಾದ ನಿನ್ನ ಒಡೆಯನನ್ನು ನೀನು
ರಕ್ಷಿಸಲಾಗಲಿಲ್ಲ. ಸೌಲನ ತಲೆಯ ಹತ್ತಿರವಿದ್ದ ಭರ್ಜಿ
ಮತ್ತು ನೀರಿನ ತಂಬಿಗೆಯನ್ನು ಹುಡುಕಿರಿ, ಅವು ಎಲ್ಲಿಗೆ
ಹೋದವು?’’ ಎಂದು ಕೇಳಿದನು.

[17]ದಾವೀದನ ಧ್ವನಿಯು ಸೌಲನಿಗೆ ತಿಳಿಯಿತು.
ಸೌಲನು, ‘‘ನನ್ನ ಮಗನಾದ ದಾವೀದನೇ, ಇದು ನಿನ್ನ
ಧ್ವನಿಯೇ? ’’ ಎಂದು ಕೇಳಿದನು.

ದಾವೀದನು, ‘‘ಹೌದು, ನನ್ನ ಒಡೆಯನಾದ ರಾಜನೇ,
ಇದು ನನ್ನ ಧ್ವನಿ’’ ಎಂದನು. [18]ದಾವೀದನು,
‘‘ಒಡೆಯನೇ, ನನ್ನನ್ನೇಕೆ ಅಟ್ಟಿಸಿಕೊಂಡು ಬರುತ್ತಿರುವೆ?
ನಾನು ಮಾಡಿರುವ ತಪ್ಪಾದರೂ ಏನು? ನಾನು ತಪ್ಪಿ
ತಸ್ಥನೇ? [19]ನನ್ನ ಒಡೆಯನೇ, ನನ್ನ ರಾಜನೇ, ನನ್ನ ಮಾತು
ಗಳನ್ನು ಆಲಿಸು! ನೀನು ನನ್ನ ಮೇಲೆ ಕೋಪಗೊಳ್ಳುವಂತೆ
ಯೆಹೋವನು ಮಾಡಿರುವುದಾದರೆ ಆತನಿಗೆ ನೈವೇದ್ಯ
ವನ್ನು ಅರ್ಪಿಸೋಣ. ಆದರೆ ನೀನು ನನ್ನ ಮೇಲೆ ಕೋಪ
ಗೊಳ್ಳುವಂತೆ ಜನರು ಮಾಡಿದ್ದರೆ, ಅವರಿಗೆ
ಯೆಹೋವನು ಕೇಡಾಗುವಂತೆ ಮಾಡಲಿ. ನನಗೆ
ಯೆಹೋವನು ನೀಡಿದ ಭೂಮಿಯನ್ನು ನಾನು ಬಿಡು
ವಂತೆ ಜನರು ಬಲವಂತಪಡಿಸಿದರು. ‘ಹೋಗು, ಹೋರ
ದೇಶೀಯರೊಂದಿಗೆ ನೆಲೆಸು. ಹೋಗು, ಇತರ ದೇವರು
ಗಳನ್ನು ಆರಾಧಿಸು’ ಎಂದು ಜನರು ನನಗೆ ಹೇಳಿದರು.

[20]ಯೆಹೋವನ ಸನ್ನಿಧಿಯಿಂದ ದೂರದಲ್ಲಿರುವ ಈ ಸ್ಥಳದಲ್ಲಿ ನನ್ನನ್ನು ಸಾಯಿಸಬೇಡಿ. ಇಸ್ರೇಲರ ರಾಜನು ಒಂದು ಸಣ್ಣ ಹುಳಕ್ಕಾಗಿ ಹುಡುಕುತ್ತಾ ಹೊರ ಬಂದಿದ್ದಾನೆ. ಕೌಜುಗ ಹಕ್ಕಿಯನ್ನು ಬೆಟ್ಟಗಳಲ್ಲಿ ಬೇಟೆ ಯಾಡುವ ಬೇಟೆಗಾರನಂತೆ ನೀನಿರುವೆಯಲ್ಲಾ!'' ಎಂದು ಹೇಳಿದನು.

[21]ನಂತರ ಸೌಲನು, ''ನಾನು ಪಾಪಮಾಡಿದ್ದೇನೆ. ನನ್ನ ಮಗನಾದ ದಾವೀದನೇ, ಹಿಂದಿರುಗಿ ಬಾ. ನನ್ನ ಜೀವವು ನಿನಗೆ ಮುಖ್ಯವೆಂಬುದನ್ನು ನನಗೆ ನೀನು ಈ ದಿನ ತೋರಿಸಿರುವೆ. ಆದುದರಿಂದ ನಾನು ನಿನ್ನನ್ನು ಹಿಂಸಿಸಲು ಪ್ರಯತ್ನಿಸುವುದಿಲ್ಲ. ನಾನು ಮೂರ್ಖನಂತೆ ವರ್ತಿಸಿದೆ. ನಾನು ದೊಡ್ಡ ತಪ್ಪನ್ನು ಮಾಡಿದ್ದೇನೆ'' ಎಂದನು.

[22]ದಾವೀದನು, ''ರಾಜನ ಭರ್ಜಿಯು ಇಲ್ಲಿದೆ. ನಿನ್ನ ಲ್ಲಿರುವ ಒಬ್ಬ ಯುವಕನು ಇಲ್ಲಿಗೆ ಬಂದು ಅದನ್ನು ತೆಗೆದು ಕೊಂಡು ಹೋಗಲಿ. [23]ಪ್ರತಿಯೊಬ್ಬನಿಗೂ ಅವನ ಕಾರ್ಯಗಳಿಗೆ ಮತ್ತು ನಂಬಿಗಸ್ತಿಕೆಗೆ ತಕ್ಕಂತೆ ಯೆಹೋವನು ಪ್ರತಿಫಲ ಕೊಡುವನು. ಇಂದು ಯೆಹೋವನು ನಿನ್ನನ್ನು ನನ್ನ ಕೈಗೆ ಒಪ್ಪಿಸಿಕೊಟ್ಟಿದ್ದರೂ ಯೆಹೋವನಿಂದ ಅಭಿಷೇಕಿಸಲ್ಪಟ್ಟ ರಾಜನಾಗಿರುವ ನಿನಗೆ ನಾನು ಕೇಡನ್ನು ಮಾಡುವುದಿಲ್ಲ! [24]ನಿನ್ನ ಜೀವವು ನನಗೆ ಮುಖ್ಯ ವೆಂಬುದನ್ನು ಈ ದಿನ ನಾನು ನಿನಗೆ ತೋರಿಸಿದೆ! ಇದೇ ರೀತಿ, ನನ್ನ ಜೀವವು ತನಗೆ ಮುಖ್ಯವೆಂಬುದನ್ನು ಯೆಹೋವನು ತೋರಿಸುತ್ತಾನೆ! ಯೆಹೋವನು ನನ್ನನ್ನು ಎಲ್ಲ ಕೇಡುಗಳಿಂದಲೂ ರಕ್ಷಿಸುತ್ತಾನೆ'' ಎಂದು ಹೇಳಿದನು.

[25]ನಂತರ ಸೌಲನು ದಾವೀದನಿಗೆ, ''ದೇವರು ನಿನ್ನನ್ನು ಆಶೀರ್ವದಿಸಲಿ, ನನ್ನ ಮಗನಾದ ದಾವೀದನೇ, ನೀನು ದೊಡ್ಡ ಕಾರ್ಯಗಳನ್ನು ಮಾಡುವೆ; ನೀನು ಯಶಸ್ವಿ ಯಾಗುವೆ'' ಎಂದನು.

ದಾವೀದನು ತನ್ನ ಮಾರ್ಗದಲ್ಲಿ ಹೊರಟು ಹೋದನು. ಸೌಲನು ಮನೆಗೆ ಹಿಂದಿರುಗಿದನು.

### ದಾವೀದನು ಫಿಲಿಷ್ಟಿಯರ ಜೊತೆಯಲ್ಲಿ ವಾಸಿಸುವನು

27 ಆದರೆ ದಾವೀದನು, ''ಸೌಲನು ಎಂದಾದರೂ ಒಂದು ದಿನ ನನ್ನನ್ನು ಹಿಡಿದುಕೊಳ್ಳುವನು. ಈಗ ಫಿಲಿಷ್ಟಿಯರ ರಾಜ್ಯಕ್ಕೆ ತಪ್ಪಿಸಿಕೊಂಡು ಹೋಗುವುದೇ ನಾನು ಮಾಡಬಹುದಾದ ಒಳ್ಳೆಯ ಕೆಲಸ. ಆಗ ಸೌಲನು ಇಸ್ರೇಲಿನಲ್ಲಿ ನನ್ನನ್ನು ಹುಡುಕುವುದನ್ನು ಬಿಟ್ಟು ಬಿಡು ತ್ತಾನೆ. ಸೌಲನಿಂದ ತಪ್ಪಿಸಿಕೊಳ್ಳಲು ಇದೇ ಸರಿಯಾದ ಮಾರ್ಗ'' ಎಂದು ತನ್ನಲ್ಲೇ ಯೋಚಿಸಿದನು.

[2]ಆದ್ದರಿಂದ ದಾವೀದನು ತನ್ನ ಆರುನೂರು ಜನ ರೊಡನೆ ಇಸ್ರೇಲನ್ನು ಬಿಟ್ಟುಹೋದನು. ಅವನು ಮಾವೋಕನ ಮಗನಾದ ಆಕೀಷನಲ್ಲಿಗೆ ಹೋದನು. ಆಕೀಷನು ಗತ್‌ನ ರಾಜ. [3]ದಾವೀದನೂ ಅವನ ಜನರೂ ಅವರ ಕುಟುಂಬಗಳವರೂ ಆಕೀಷನೊಂದಿಗೆ ಗತ್‌ನಲ್ಲಿ ನೆಲೆಸಿದರು. ದಾವೀದನ ಜೊತೆಯಲ್ಲಿ ಅವನ ಇಬ್ಬರು ಹೆಂಡತಿಯರೂ ಇದ್ದರು. ಅವರು ಯಾರೆಂದರೆ, ಇಜ್ರೇಲ್ಯಳಾದ ಅಹೀನೋವಮಳು ಮತ್ತು ಕರ್ಮೆಲಿನ ಅಬೀಗೈಲಳು. ಅಬೀಗೈಲಳು ನಾಬಾಲನ ವಿಧವೆ. [4]ದಾವೀದನು ಗತ್‌ಗೆ ಓಡಿಹೋದನೆಂದು ಜನರು ಸೌಲನಿಗೆ ತಿಳಿಸಿದರು. ಸೌಲನು ಅವನನ್ನು ಹುಡುಕುವುದನ್ನು ಬಿಟ್ಟುಬಿಟ್ಟನು.

[5]ದಾವೀದನು ಆಕೀಷನಿಗೆ, ''ನೀನು ನನ್ನನ್ನು ಮೆಚ್ಚಿ ಕೊಂಡಿದ್ದರೆ ಯಾವುದಾದರೊಂದು ಊರಲ್ಲಿ ನನಗೆ ಸ್ಥಳ ವನ್ನು ಕೊಡು. ನಾನು ನಿನ್ನ ಸೇವಕನಷ್ಟೆ, ನಾನು ನಿನ್ನೊಡನೆ ಈ ರಾಜಧಾನಿಯಲ್ಲಿ ಇರುವುದಕ್ಕಿಂತ ಅಲ್ಲಿ ವಾಸ ಮಾಡುತ್ತೇನೆ'' ಎಂದು ಹೇಳಿದನು.

[6]ಆಕೀಷನು ದಾವೀದನಿಗೆ ಚಿಕ್ಲಗ್ ಎಂಬ ಊರನ್ನು ಕೊಟ್ಟನು. ಅಂದಿನಿಂದಲೂ ಚಿಕ್ಲಗ್ ಊರು ಯೆಹೂದದ ರಾಜನಿಗೆ ಸೇರಿರುತ್ತದೆ. [7]ದಾವೀದನು ಫಿಲಿಷ್ಟಿಯರೊಂದಿಗೆ ಒಂದು ವರ್ಷ ನಾಲ್ಕು ತಿಂಗಳು ವಾಸ ಮಾಡಿದನು.

### ದಾವೀದನು ರಾಜನಾದ ಆಕೀಷನನ್ನು ಮೋಸಗೊಳಿಸುವನು

[8]ದಾವೀದನು ಮತ್ತು ಅವನ ಜನರು ಅಮಾಲೇಕ್ಯರ ಮೇಲೆಯೂ ಗೆಷೂರ್ಯರ ಮೇಲೆಯೂ ಯುದ್ಧ ಮಾಡಲು ಹೋದರು. ದಾವೀದನ ಜನರು ಅವರನ್ನು ಸೋಲಿಸಿ ಅವರ ಸಂಪತ್ತನ್ನು ವಶಪಡಿಸಿಕೊಂಡರು. ಈಜಿಪ್ಟಿನವರೆಗೆ ವಿಸ್ತರಿಸಿರುವ ಶೂರಿನ ಸಮೀಪದ ತೇಲಾಮಿನವರೆಗೂ ಜನರು ವಾಸಿಸುತ್ತಿದ್ದರು. [9]ದಾವೀದನು ಆ ಪ್ರದೇಶದ ಜನರೊಂದಿಗೆ ಯುದ್ಧಮಾಡಿ ಯಾರನ್ನೂ ಜೀವಸಹಿತ ಬಿಡಲಿಲ್ಲ. ಅವರಿಗೆ ಸೇರಿದ ಕುರಿ ಗಳನ್ನು, ದನಗಳನ್ನು, ಹೇಸರಕತ್ತೆಗಳನ್ನು, ಒಂಟೆಗಳನ್ನು ಮತ್ತು ಬಟ್ಟೆಗಳನ್ನು ದಾವೀದನು ವಶಪಡಿಸಿಕೊಂಡನು. ನಂತರ ಅವುಗಳನ್ನು ಆಕೀಷನ ಬಳಿಗೆ ತಂದನು.

[10]ದಾವೀದನು ಅನೇಕ ಸಲ ಹೀಗೆ ಮಾಡಿದನು. ಪ್ರತಿ ಸಲವೂ ಆಕೀಷನು ದಾವೀದನನ್ನು, ''ನೀನು ಎಲ್ಲಿ ಯುದ್ಧಮಾಡಿದೆ ಮತ್ತು ಇವುಗಳನ್ನು ಎಲ್ಲಿಂದ ತಂದೆ'' ಎಂದು ಕೇಳುತ್ತಿದ್ದನು. ದಾವೀದನು, ''ನಾನು ಯೆಹೂದ ದೇಶದ ದಕ್ಷಿಣ ಭಾಗದ ವಿರುದ್ಧ ಯುದ್ಧ ಮಾಡಿದೆ'' ಎಂದಾಗಲೀ, ''ನಾನು ಎರಹ್ಮೇಲ್ಯರ ದಕ್ಷಿಣ ಭಾಗದ ವಿರುದ್ಧ ಯುದ್ಧಮಾಡಿದೆ'' ಎಂದಾಗಲೀ ''ನಾನು ಕೇನ್ಯರ ದಕ್ಷಿಣ ಭಾಗದ ವಿರುದ್ಧ ಯುದ್ಧಮಾಡಿದೆ'' ಎಂದಾಗಲೀ ಹೇಳುತ್ತಿದ್ದನು. [11]ದಾವೀದನು ಒಬ್ಬ ಗಂಡಸನ್ನಾಗಲೀ ಹೆಂಗಸನ್ನಾಗಲೀ ಗತ್ ಊರಿಗೆ ಜೀವಸಹಿತ ಎಂದೂ

ತರಲಿಲ್ಲ. ದಾವೀದನು, ‘‘ನಾವು ಒಬ್ಬ ಮನುಷ್ಯನನ್ನು ಜೀವಸಹಿತ ಬಿಟ್ಟರೆ, ನಾನು ನಿಜವಾಗಿ ಮಾಡುತ್ತಿರುವುದನ್ನು ಅವನು ಆಕೀಷನಿಗೆ ತಿಳಿಸಬಹುದು’’ ಎಂದು ಯೋಚಿಸಿದನು.

ದಾವೀದನು ಫಿಲಿಷ್ಟಿಯರ ದೇಶದಲ್ಲಿ ವಾಸವಾಗಿದ್ದ
ಕಾಲದಲ್ಲೆಲ್ಲಾ ಹೀಗೆಯೇ ಮಾಡುತ್ತಿದ್ದನು. [12]ಆಕೀಷನು
ದಾವೀದನಲ್ಲಿ ಭರವಸೆ ಇಡತೊಡಗಿದನು. ಆಕೀಷನು ತನ್ನೊಳಗೆ, ‘‘ಈಗ ದಾವೀದನ ಸ್ವಂತ ಜನರೇ ಅವನನ್ನು ದ್ವೇಷಿಸುವರು. ಇಸ್ರೇಲರು ದಾವೀದನನ್ನು ಬಹಳವಾಗಿ ದ್ವೇಷಿಸುತ್ತಾರೆ. ಈಗ ದಾವೀದನು ಶಾಶ್ವತವಾಗಿ ನನ್ನ ಸೇವೆಮಾಡುವನು’’ ಎಂದುಕೊಂಡನು.

### ಫಿಲಿಷ್ಟಿಯರು ಯುದ್ಧಕ್ಕೆ ಸಿದ್ಧರಾದರು

28 ತರುವಾಯ, ಫಿಲಿಷ್ಟಿಯರು ಇಸ್ರೇಲರ ವಿರುದ್ಧ ಹೋರಾಡಲು ತಮ್ಮ ಸೈನ್ಯವನ್ನೆಲ್ಲ ಒಟ್ಟುಗೂಡಿಸಿದರು. ಆಕೀಷನು, ‘‘ನೀನು ಮತ್ತು ನಿನ್ನ ಜನರು ಇಸ್ರೇಲರ ವಿರುದ್ಧ ಹೋರಾಡುವುದಕ್ಕಾಗಿ ನನ್ನ ಜೊತೆಗೂಡಬೇಕೆಂಬುದನ್ನು ನೀನು ಅರ್ಥ ಮಾಡಿ ಕೊಂಡಿರುವೆಯಾ?’’ ಎಂದು ದಾವೀದನನ್ನು ಕೇಳಿದನು.

[2]ದಾವೀದನು, ‘‘ಹೌದು! ಆಗ ನಾನು ಮಾಡುವುದನ್ನು ಸ್ವತಃ ನೀವೇ ನೋಡುವಿರಿ’’ ಎಂದನು.

ಆಕೀಷನು, ‘‘ಸರಿ, ನಾನು ನಿನ್ನನ್ನು ಅಂಗರಕ್ಷಕನನ್ನಾಗಿ ಮಾಡಿಕೊಳ್ಳುತ್ತೇನೆ. ನೀನು ನನ್ನನ್ನು ಯುದ್ಧ ಕಾಲದಲ್ಲೆಲ್ಲಾ ರಕ್ಷಿಸುವೆ’’ ಎಂದನು.

### ಸೌಲನು ಮತ್ತು ಏಂದೋರಿನ ಯಕ್ಷಿಣಿ

[3]ಸಮುವೇಲನು ಮರಣ ಹೊಂದಿದನು. ಸಮುವೇಲನ ಮರಣಕ್ಕಾಗಿ ಇಸ್ರೇಲರೆಲ್ಲಾ ತಮ್ಮ ಸಂತಾಪವನ್ನು ಸೂಚಿಸಿದರು. ಅವರು ಸಮುವೇಲನನ್ನು ಅವನ ಊರಾದ ರಾಮದಲ್ಲಿ ಸಮಾಧಿ ಮಾಡಿದರು. ಸೌಲನು ಈ ಮೊದಲು, ಸತ್ತವರ ಆತ್ಮದೊಂದಿಗೆ ಮಾತನಾಡುವವರನ್ನೂ* ಜ್ಯೋತಿಷಿಗಳನ್ನೂ ಬಲಾತ್ಕಾರದಿಂದ ಇಸ್ರೇಲಿನಿಂದ ಓಡಿಸಿದ್ದನು.

[4]ಫಿಲಿಷ್ಟಿಯರು ಯುದ್ಧಕ್ಕೆ ಸಿದ್ಧರಾದರು. ಅವರೆಲ್ಲ ಶೂನೇಮಿಗೆ ಬಂದು ಆ ಸ್ಥಳದಲ್ಲಿಯೇ ಪಾಳೆಯಮಾಡಿಕೊಂಡರು. ಸೌಲನು ಇಸ್ರೇಲರನ್ನೆಲ್ಲ ಒಟ್ಟುಗೂಡಿಸಿಕೊಂಡು ಬಂದು ಗಿಲ್ಬೋವದಲ್ಲಿ ಪಾಳೆಯ ಮಾಡಿ
ಕೊಂಡನು. [5]ಸೌಲನು ಫಿಲಿಷ್ಟಿಯರ ಸೈನ್ಯವನ್ನು ನೋಡಿ ಹೆದರಿದನು. ಅವನ ಹೃದಯವು ಭಯದಿಂದ ಬಡಿದುಕೊಳ್ಳತೊಡಗಿತು. [6]ಸೌಲನು ಯೆಹೋವನಿಗೆ ಪ್ರಾರ್ಥನೆ
ಮಾಡಿದನು. ಆದರೆ ಯೆಹೋವನು ಅವನಿಗೆ ಉತ್ತರ ನೀಡಲಿಲ್ಲ. ದೇವರು ಕನಸುಗಳಲ್ಲಿಯೂ ಸೌಲನೊಡನೆ ಮಾತನಾಡಲಿಲ್ಲ. ದೇವರು ಅವನಿಗೆ ಊರೀಮ್‌ನಿಂದಾಗಲೀ ಉತ್ತರ ಕೊಡಲಿಲ್ಲ. ದೇವರು ಪ್ರವಾದಿಗಳ ಮೂಲಕವಾಗಿಯೂ ಸೌಲನೊಂದಿಗೆ ಮಾತನಾಡಲಿಲ್ಲ.
[7]ಕಡೆಯದಾಗಿ, ಸೌಲನು ತನ್ನ ಸೇನಾಧಿಪತಿಗಳಿಗೆ, ‘‘ಸತ್ತವರ ಆತ್ಮಗಳೊಂದಿಗೆ ಮಾತನಾಡಬಲ್ಲ ಒಬ್ಬ ಮಾಂತ್ರಿಕ ಹೆಂಗಸನ್ನು ಕಂಡುಹಿಡಿಯಿರಿ. ಈ ಯುದ್ಧದಲ್ಲಿ ಏನಾಗುವುದೆಂಬುದನ್ನು ನಾನು ಹೋಗಿ ಅವಳನ್ನು ಕೇಳುತ್ತೇನೆ’’ ಎಂದು ಹೇಳಿದನು.

ಅವನ ಅಧಿಕಾರಿಗಳು, ‘ಏಂದೋರಿನಲ್ಲಿ ಒಬ್ಬ ಮಾಂತ್ರಿಕಳಿದ್ದಾಳೆ’’ಎಂದು ಉತ್ತರಿಸಿದರು.

[8]ಯಾರಿಗೂ ತನ್ನ ಗುರುತು ಸಿಕ್ಕದಂತೆ ಸೌಲನು ವೇಷವನ್ನು ಬದಲಾಯಿಸಿಕೊಂಡನು. ಸೌಲನು ತನ್ನ ಜನರಿಬ್ಬರೊಡನೆ ಅದೇ ರಾತ್ರಿಯಲ್ಲೇ ಆ ಬೇತಾಳಿಕಳನ್ನು* ನೋಡಲು ಹೋದನು. ಸೌಲನು ಅವಳಿಗೆ, ‘‘ಬೇತಾಳದ ಮೂಲಕ ನನ್ನ ಭವಿಷ್ಯವನ್ನು ನನಗೆ ತೋರಿಸು, ನಾನು ಹೆಸರಿಸುವ ವ್ಯಕ್ತಿಯನ್ನು ಕರೆ’’ಎಂದು ಕೇಳಿದನು.

[9]ಆದರೆ ಆ ಮಾಂತ್ರಿಕಳು ಸೌಲನಿಗೆ, ‘‘ಸೌಲನು ಏನು ಮಾಡಿದನೆಂಬುದು ನಿನಗೆ ನಿಜವಾಗಿಯೂ ತಿಳಿದಿದೆ. ಅವನು ಮಾಂತ್ರಿಕರನ್ನೂ ಜ್ಯೋತಿಷಿಗಳನ್ನೂ ಬಲಾತ್ಕಾರವಾಗಿ ನಾಡಿನಿಂದ ಹೊರಗಟ್ಟಿದನು. ನೀನು ನನ್ನನ್ನು ಬಲೆಗೆ ಬೀಳಿಸಿ ಕೊಲ್ಲಲು ಪ್ರಯತ್ನಿಸುತ್ತಿರುವೆ’’ ಎಂದಳು.

[10]ಸೌಲನು ಯೆಹೋವನ ಹೆಸರಿನಲ್ಲಿ ಆ ಮಾಂತ್ರಿಕಳಿಗೆ ವಾಗ್ದಾನಮಾಡಿ, ‘‘ಯೆಹೋವನಾಣೆ, ಈ ಕಾರ್ಯವನ್ನು ಮಾಡಿದ್ದಕ್ಕಾಗಿ ನಿನಗೆ ದಂಡನೆಯಾಗುವುದಿಲ್ಲ’’ ಎಂದು ಹೇಳಿದನು.

[11]ಅವಳು,‘‘ನಿನಗಾಗಿ ನಾನು ಯಾರನ್ನು ಬರಮಾಡಬೇಕು?’’ ಎಂದು ಕೇಳಿದಳು.

ಸೌಲನು, ‘‘ಸಮುವೇಲನನ್ನು ಬರಮಾಡು’’ ಎಂದು ಉತ್ತರಿಸಿದನು.

[12]ಅಂತೆಯೇ ಆಯಿತು. ಆ ಹೆಂಗಸು ಸಮುವೇಲನನ್ನು ಕಂಡಕೊಡಲೇ ಗಟ್ಟಿಯಾಗಿ ಅರಚಿದಳು.

ಅವಳು ಸೌಲನಿಗೆ, ‘‘ನೀನು ನನ್ನನ್ನು ವಂಚಿಸಿದೆ! ನೀನೇ ಸೌಲನು’’ ಎಂದಳು.

[13]ರಾಜನು ಆ ಹೆಂಗಸಿಗೆ, ‘‘ಹೆದರದಿರು! ನಿನಗೇನು ಕಾಣಿಸುತ್ತಿದೆ?’’ ಎಂದನು.

ಆ ಹೆಂಗಸು, ‘‘ಒಂದು ಆತ್ಮವು ಭೂಮಿಯೊಳಗಿಂದ* ಮೇಲಕ್ಕೆ ಬರುತ್ತಿರುವುದು ನನಗೆ ಕಾಣುತ್ತಿದೆ’’ ಎಂದಳು.

---

**ಸತ್ತವರ ಆತ್ಮದೊಂದಿಗೆ ಮಾತನಾಡುವವರು** ಊರೀಮ್ ಮತ್ತು ತುಮ್ಮೀಮ್ ಇವುಗಳ ಮೂಲಕವಾಗಿ ಜನರು ದೇವರಿಂದ ಉತ್ತರಗಳನ್ನು ಪಡೆದುಕೊಳ್ಳುತ್ತಿದ್ದರು. ಅದು ಹೇಗೆಂಬುದು ಸ್ಪಷ್ಟವಾಗಿ ತಿಳಿದಿಲ್ಲ. ನೋಡಿ ಅರಣ್ಯಕಾಂಡ 27 :20-22

**ಬೇತಾಳಿಕಳು** ಪ್ರೇತಗಳಿಂದ ತಿಳಿದುಕೊಂಡು ಸಮಾಚಾರಗಳನ್ನು ಇತರರಿಗೆ ತಿಳಿಸುವವಳು.

**ಭೂಮಿಯೊಳಗಿಂದ** ಅಥವಾ, ‘‘ಶಿಯೋಲ್.’’

14ಸೌಲನು, ‘‘ಅವನ ರೂಪ ಹೇಗಿದೆ?’’ ಎಂದನು.

ಆ ಹೆಂಗಸು, ‘‘ಅವನು ನಿಲುವಂಗಿಯನ್ನು ಧರಿಸಿಕೊಂಡಿರುವ ಒಬ್ಬ ಮುದುಕನಂತಿದ್ದಾನೆ’’ ಎಂದು ಹೇಳಿದಳು.

ಅವನೇ ಸಮುವೇಲನೆಂಬುದನ್ನು ಸೌಲನು ತಿಳಿದುಕೊಂಡು ಸಾಷ್ಟಾಂಗ ನಮಸ್ಕಾರ ಮಾಡಿದನು. 15ಸಮುವೇಲನು, ‘‘ನನಗೆ ತೊಂದರೆಯನ್ನೇಕೆ ಕೊಡುತ್ತಿರುವೆ? ನೀನು ನನ್ನನ್ನು ನೆಲದ ಮೇಲಕ್ಕೆ ಬರಮಾಡಿದ್ದೇಕೆ?’’ ಎಂದು ಸೌಲನನ್ನು ಕೇಳಿದನು.

ಸೌಲನು, ‘‘ನಾನು ತೊಂದರೆಯಲ್ಲಿದ್ದೇನೆ! ಫಿಲಿಷ್ಟಿಯರು ನನ್ನ ವಿರುದ್ಧ ಹೋರಾಡಲು ಬರುತ್ತಿದ್ದಾರೆ; ದೇವರು ನನ್ನನ್ನು ತ್ಯಜಿಸಿದ್ದಾನೆ. ದೇವರು ನನಗೆ ಉತ್ತರವನ್ನೇ ಕೊಡುತ್ತಿಲ್ಲ; ಆತನು ಪ್ರವಾದಿಗಳಿಂದಾಗಲೀ ಕನಸುಗಳಿಂದಾಗಲೀ ನನಗೆ ಉತ್ತರಿಸುತ್ತಿಲ್ಲ. ಆದಕಾರಣವೇ ನಾನು ನಿನ್ನನ್ನು ಕರೆದೆನು. ನಾನು ಮಾಡಬೇಕಾದದ್ದನ್ನು ನನಗೆ ತಿಳಿಸು!’’ ಎಂದನು.

16ಸಮುವೇಲನು, ‘‘ಯೆಹೋವನು ನಿನ್ನನ್ನು ತ್ಯಜಿಸಿದ್ದಾನೆ. ಈಗ ಆತನು ನಿನ್ನ ನೆರೆಯವನೊಂದಿಗಿದ್ದಾನೆ. ಆದ್ದರಿಂದ ನನ್ನನ್ನೇಕೆ ಕರೆಯುವೆ? 17ಯೆಹೋವನು ನಿನಗೆ ಹೇಳಿದ್ದಂತೆಯೇ ಮಾಡಿದನು. ಆತನು ಅವುಗಳ ಬಗ್ಗೆ ನನ್ನ ಮೂಲಕವಾಗಿ ನಿನಗೆ ತಿಳಿಸಿದನು. ಯೆಹೋವನು ರಾಜ್ಯಾಧಿಕಾರವನ್ನು ನಿನ್ನ ಕೈಗಳಿಂದ ಕಿತ್ತುಕೊಂಡು ನಿನ್ನ ನೆರೆಯವರಲ್ಲಿ ಒಬ್ಬನಿಗೆ ಕೊಟ್ಟನು. ದಾವೀದನೇ ಆ ನೆರೆಯವನು. 18ನೀನು ಯೆಹೋವನಿಗೆ ವಿಧೇಯನಾಗಲಿಲ್ಲ. ನೀನು ಅಮಾಲೇಕ್ಯರನ್ನು ನಾಶಗೊಳಿಸಲಿಲ್ಲ; ಯೆಹೋವನು ಅವರ ಬಗ್ಗೆ ಎಷ್ಟು ಕೋಪಗೊಂಡಿದ್ದನೆಂಬುದನ್ನು ಅವರಿಗೆ ತಿಳಿಯಪಡಿಸಿಲ್ಲ. ಆದುದರಿಂದಲೇ ಯೆಹೋವನು ಇಂದು ನಿನಗೆ ಹೀಗೆ ಮಾಡಿದ್ದಾನೆ. 19ಯೆಹೋವನು ನಿನ್ನನ್ನು ಮತ್ತು ಇಸ್ರೇಲರನ್ನು ಫಿಲಿಷ್ಟಿಯರ ವಶಕ್ಕೆ ಒಪ್ಪಿಸುತ್ತಾನೆ. ಫಿಲಿಷ್ಟಿಯರು ಇಸ್ರೇಲ್ ಸೈನ್ಯವನ್ನು ಸೋಲಿಸುವಂತೆ ಯೆಹೋವನು ಮಾಡುತ್ತಾನೆ. ಮಾರನೆಯ ದಿನ, ನೀನು ಮತ್ತು ನಿನ್ನ ಮಕ್ಕಳು ನನ್ನೊಡನೆ ಇಲ್ಲಿರುತ್ತೀರಿ!’’ ಎಂದು ಹೇಳಿದನು.

20ಆ ಕೂಡಲೇ ಸೌಲನು ನೆಲದ ಮೇಲೆ ಕುಸಿದು ಬಿದ್ದನು. ಸಮುವೇಲನು ಹೇಳಿದ ಮಾತುಗಳನ್ನು ಕೇಳಿ ಸೌಲನು ಭಯಗೊಂಡನು. ಸೌಲನು ಅಂದು ಹಗಲು ಮತ್ತು ರಾತ್ರಿ ಏನನ್ನೂ ತಿಂದಿರಲಿಲ್ಲ; ಆದ್ದರಿಂದ ಅವನು ಬಹಳ ಬಲಹೀನನಾಗಿದ್ದನು.

21ಆ ಹೆಂಗಸು ಸೌಲನ ಬಳಿಗೆ ಬಂದಳು. ಸೌಲನು ನಿಜವಾಗಿಯೂ ಭಯಗೊಂಡಿರುವುದನ್ನು ಅವಳು ನೋಡಿದಳು. ‘‘ಇಲ್ಲಿ ನೋಡು, ನಾನು ನಿನ್ನ ಸೇವಕಿ. ನಾನು ನಿನಗೆ ವಿಧೇಯಳಾಗಿದ್ದೇನೆ. ನಾನು ನನ್ನ ಜೀವವನ್ನೇ ಕಡೆಗಣಿಸಿ ನೀನು ಹೇಳಿದ್ದನ್ನು ಮಾಡಿದೆ. 22ಈಗ ದಯವಿಟ್ಟು ನನ್ನ ಮಾತನ್ನು ಆಲಿಸು. ನಾನು ನಿನಗೆ ಸ್ವಲ್ಪ ಆಹಾರವನ್ನು ಕೊಡುತ್ತೇನೆ. ನೀನು ತಿನ್ನಲೇಬೇಕು. ಆಗ ನಿನ್ನ ಪ್ರಯಾಣವನ್ನು ಮುಂದುವರಿಸಲು ನಿನಗೆ ಸಾಕಷ್ಟು ಶಕ್ತಿಯಿರುವುದು’’ ಎಂದಳು.

23ಆದರೆ ಸೌಲನು ನಿರಾಕರಿಸಿ, ‘‘ನಾನು ತಿನ್ನುವುದಿಲ್ಲ’’ ಎಂದನು.

ಊಟಮಾಡುವಂತೆ ಸೌಲನ ಅಧಿಕಾರಿಗಳೂ ಬೇಡಿಕೊಂಡರು. ಕೊನೆಗೆ ಸೌಲನು ಅವರ ಮಾತಿಗೆ ಕಿವಿಗೊಟ್ಟನು. ಅವನು ನೆಲದಿಂದ ಮೇಲಕ್ಕೆದ್ದು ಹಾಸಿಗೆಯ ಮೇಲೆ ಕುಳಿತನು. 24ಆ ಹೆಂಗಸಿನ ಮನೆಯಲ್ಲಿ ಒಂದು ಕೊಬ್ಬಿದ ಕರು ಇತ್ತು. ಅವಳು ಬೇಗನೆ ಅದನ್ನು ಕೊಯ್ದಳು. ಅವಳು ಸ್ವಲ್ಪ ಹಿಟ್ಟನ್ನು ತೆಗೆದುಕೊಂಡು ಅದನ್ನು ತನ್ನ ಕೈಗಳಿಂದಲೇ ನಾದಿದಳು. ನಂತರ ಅವಳು ಕೆಲವು ರೊಟ್ಟಿಗಳನ್ನು ಸುಟ್ಟಳು. 25ಆ ಹೆಂಗಸು ಸೌಲನ ಮತ್ತು ಅವನ ಸೇನಾಧಿಕಾರಿಗಳ ಮುಂದೆ ಆಹಾರವನ್ನಿಟ್ಟಳು. ಸೌಲನು ಮತ್ತು ಅವನ ಅಧಿಕಾರಿಗಳು ಊಟಮಾಡಿದರು. ನಂತರ ಆ ರಾತ್ರಿಯೇ ಅವರು ಅಲ್ಲಿಂದ ಹೊರಟುಹೋದರು.

## ಫಿಲಿಷ್ಟಿಯರ ಅಧಿಪತಿಗಳು ದಾವೀದನ ಸಹಾಯವನ್ನು ನಿರಾಕರಿಸಿದರು

29 ಫಿಲಿಷ್ಟಿಯರ ಸೈನಿಕರೆಲ್ಲಾ ಅಫೇಕಿನಲ್ಲಿ ಒಟ್ಟುಗೂಡಿದರು. ಇಸ್ರೇಲರು ಇಜ್ರೇಲ್ ಬಳಿಯಿರುವ ಚಿಲುಮೆಯ ಹತ್ತಿರ ಪಾಳೆಯಮಾಡಿಕೊಂಡರು. 2ಫಿಲಿಷ್ಟಿಯರ ಅಧಿಪತಿಗಳು ನೂರು ಜನರ ಗುಂಪುಗಳಾಗಿಯೂ ಒಂದು ಸಾವಿರ ಜನರ ಗುಂಪುಗಳಾಗಿಯೂ ಬರುತ್ತಿದ್ದರು. ದಾವೀದನು ಮತ್ತು ಅವನ ಜನರು ಆಕೀಷನ ಹಿಂದೆ ಬರುತ್ತಿದ್ದರು.

3ಫಿಲಿಷ್ಟಿಯರ ಅಧಿಪತಿಗಳು, ‘‘ಈ ಇಬ್ರಿಯರು ಇಲ್ಲಿ ಮಾಡುತ್ತಿರುವುದೇನು?’’ ಎಂದು ಕೇಳಿದರು.

ಆಕೀಷನು ಫಿಲಿಷ್ಟಿಯರ ಸೇನಾಧಿಪತಿಗಳಿಗೆ, ‘‘ಇವನು ದಾವೀದ. ದಾವೀದನು ಸೌಲನ ಅಧಿಕಾರಿಗಳಲ್ಲಿ ಒಬ್ಬನು. ದಾವೀದನು ಬಹಳ ಕಾಲದಿಂದ ನನ್ನೊಡನೆ ಇದ್ದಾನೆ. ದಾವೀದನು ಸೌಲನನ್ನು ತೊರೆದು ನನ್ನ ಬಳಿಗೆ ಬಂದಾಗಿನಿಂದ ನಾನು ಅವನಲ್ಲಿ ಯಾವ ತಪ್ಪನ್ನೂ ಗುರುತಿಸಿಲ್ಲ’’ ಎಂದನು.

4ಆದರೆ ಫಿಲಿಷ್ಟಿಯರ ಅಧಿಪತಿಗಳು ಆಕೀಷನ ಮೇಲೆ ಬಹಳ ಕೋಪಗೊಂಡು, ‘‘ದಾವೀದನನ್ನು ಹಿಂದಕ್ಕೆ ಕಳುಹಿಸು! ನೀನು ಕೊಟ್ಟಿರುವ ನಗರಕ್ಕೆ ದಾವೀದನು ಹಿಂದಿರುಗಿ ಹೋಗಲೇಬೇಕು. ಅವನು ನಮ್ಮೊಡನೆ ಯುದ್ಧಕ್ಕೆ ಬರುವಂತಿಲ್ಲ. ಅವನು ನಮ್ಮ ಜೊತೆಯಲ್ಲಿದ್ದರೆ, ಆಗ ನಮ್ಮ ಪಾಳೆಯದಲ್ಲಿ ಒಬ್ಬ ಶತ್ರುವಿದ್ದಂತಾಗುತ್ತದೆ. ಅವನು ನಮ್ಮ ಜನರನ್ನು ಕೊಲ್ಲುವುದರ

ಮೂಲಕ ತನ್ನ ರಾಜನ ಮೆಚ್ಚಿಗೆಯನ್ನು ಗಳಿಸುತ್ತಾನೆ.
5ದಾವೀದನೆಂಬ ಈ ವ್ಯಕ್ತಿಯನ್ನು ಕುರಿತು, ಇಸ್ರೇಲರು
ಕುಣಿಯುತ್ತಾ ಹಾಡುವ ಹಾಡು ಹೀಗಿದೆ:

ಸೌಲನು ಸಾವಿರಗಟ್ಟಲೆ ಶತ್ರುಗಳನ್ನು
ಕೊಂದನು. ದಾವೀದನು ಲಕ್ಷಾಂತರಗಟ್ಟಲೆ
ಶತ್ರುಗಳನ್ನು ಕೊಂದನು!'' ಎಂದು ಹೇಳಿದರು.

6ಆದ್ದರಿಂದ ಆಕೀಷನು ದಾವೀದನನ್ನು ಕರೆದು,
''ಯೆಹೋವನಾಣೆ, ನೀನು ನನಗೆ ಯಥಾರ್ಥನಾಗಿ
ರುವೆ. ನೀನು ನನ್ನ ಸೈನ್ಯದಲ್ಲಿ ಸೇವೆ ಮಾಡುವುದೂ ನನಗೆ
ಇಷ್ಟ. ನೀನು ನನ್ನ ಹತ್ತಿರಕ್ಕೆ ಬಂದಾಗಿನಿಂದ ನಾನು ನಿನ್ನಲ್ಲಿ
ಯಾವ ತಪ್ಪನ್ನೂ ಗುರುತಿಸಿಲ್ಲ. ನೀನು ಒಳ್ಳೆಯವನೆಂದು
ಫಿಲಿಷ್ಟಿಯರ ಅಧಿಪತಿಗಳು* ಸಹ ಯೋಚಿಸಿದ್ದಾರೆ.
7ಸಮಾಧಾನದಿಂದ ಹಿಂದಿರುಗಿ ಹೋಗು. ಫಿಲಿಷ್ಟಿಯರ
ಅಧಿಪತಿಗಳ ವಿರುದ್ಧ ಏನನ್ನೂ ಮಾಡಬೇಡ'' ಎಂದು
ಹೇಳಿದನು.

8ದಾವೀದನು, ''ನಾನು ಮಾಡಿರುವ ತಪ್ಪಾದರೂ
ಏನು? ನಾನು ನಿನ್ನ ಹತ್ತಿರಕ್ಕೆ ಬಂದಾಗಿನಿಂದ ಈಗಿನವರೆಗೆ
ನನ್ನಲ್ಲಿ ನೀನು ಗುರುತಿಸಿರುವ ದುಷ್ಟತನವಾದರೂ
ಏನು? ರಾಜನಾದ ನನ್ನ ಒಡೆಯನ ಶತ್ರುಗಳ ವಿರುದ್ಧ
ಹೋರಾಡಲು ನನ್ನನ್ನು ಬಿಡುವುದಿಲ್ಲವೇಕೆ?''ಎಂದು
ಹೇಳಿದನು.

9ಆಕೀಷನು, ''ನೀನು ಒಳ್ಳೆಯವನೆಂದು ನಾನು
ನಂಬುತ್ತೇನೆ. ನೀನು ದೇವದೂತನಂತಿರುವೆ. ಆದರೆ
ಫಿಲಿಷ್ಟಿಯ ಸೇನಾಧಿಪತಿಗಳು, 'ದಾವೀದನು ನಮ್ಮ ಜೊತೆ
ಯುದ್ಧಕ್ಕೆ ಬರುವಂತಿಲ್ಲ' ಎಂದು ಈಗಲೂ ಹೇಳು
ತ್ತಿದ್ದಾರೆ. 10ನೀನು ಮತ್ತು ನಿನ್ನ ಜನರು ಮುಂಜಾನೆಯ
ಲ್ಲಿಯೇ ಹಿಂದಿರುಗಿ ಹೋಗಿ. ನಾನು ನಿನಗೆ ಕೊಟ್ಟಿರುವ
ನಗರಕ್ಕೆ ಹಿಂದಿರುಗು. ಅಧಿಪತಿಗಳು ನಿನ್ನ ಬಗ್ಗೆ ಹೇಳು
ತ್ತಿರುವ ಕೆಟ್ಟ ಮಾತುಗಳಿಗೆ ಗಮನ ನೀಡಬೇಡ. ನೀನು
ಒಬ್ಬ ಒಳ್ಳೆಯ ಮನುಷ್ಯ. ಆದ್ದರಿಂದ ಸೂರ್ಯನು
ಮೇಲೇರುವಷ್ಟರಲ್ಲಿ ನೀನು ನಮ್ಮನ್ನು ಬಿಟ್ಟುಹೋಗು''
ಎಂದನು.

11ಆದ್ದರಿಂದ ದಾವೀದನು ಮತ್ತು ಅವನ ಜನರು
ಮಾರನೆಯ ದಿನ ಬೆಳಿಗ್ಗೆ ಬೇಗನೆ ಎದ್ದು ಫಿಲಿಷ್ಟಿಯರ
ದೇಶಕ್ಕೆ ಹಿಂದಿರುಗಿ ಹೋದರು. ಫಿಲಿಷ್ಟಿಯರು
ಇಜ್ರೇಲಿಗೆ ಹೋದರು.

**ಫಿಲಿಷ್ಟಿಯರ ಅಧಿಪತಿಗಳು** ಫಿಲಿಷ್ಟಿಯರ ಅಧಿಪತಿಗಳು ದಾವೀದನನ್ನು ಮೆಚ್ಚಿಕೊಂಡಿದ್ದರು. ಆದರೆ ಫಿಲಿಷ್ಟಿಯ ಸೇನಾಧಿಪತಿಗಳು ಅವನಿಗೆ ವಿರುದ್ಧವಾಗಿದ್ದರು.

### ಚಿಕ್ಲಗಿಗೆ ಅಮಾಲೇಕ್ಯರ ಆಕ್ರಮಣ

30 ಮೂರನೆಯ ದಿನ ದಾವೀದನು ಮತ್ತು ಅವನ
ಜನರು ಚಿಕ್ಲಗ್ ಊರಿಗೆ ಬಂದರು.
ಅಮಾಲೇಕ್ಯರು ಚಿಕ್ಲಗನ್ನು ಆಕ್ರಮಣ ಮಾಡಿರುವುದನ್ನು
ಅವರು ನೋಡಿದರು. ಅಮಾಲೇಕ್ಯರು ನೆಗೆವ್
ಪ್ರದೇಶದ ಮೇಲೆ ದಾಳಿ ಮಾಡಿದರು. ಅವರು ಚಿಕ್ಲಗನ್ನು
ಆಕ್ರಮಿಸಿದ್ದರು ಮತ್ತು ಆ ನಗರವನ್ನು ಸುಟ್ಟುಹಾಕಿದ್ದರು.
2ಅವರು ಚಿಕ್ಲಗಿನ ಸ್ತ್ರೀಯರನ್ನು ಚಿಕ್ಕವರು ದೊಡ್ಡವರೆನ್ನದೆ
ಎಲ್ಲರನ್ನೂ ಬಂಧಿಗಳನ್ನಾಗಿ ಎಳೆದುಕೊಂಡು ಹೋಗಿ
ದ್ದರು; ಅವರು ಯಾರನ್ನೂ ಕೊಂದಿರಲಿಲ್ಲ, ಆದರೆ
ಎಲ್ಲರನ್ನೂ ಎಳೆದುಕೊಂಡು ಹೋಗಿದ್ದರು.
3ದಾವೀದನು ಮತ್ತು ಅವನ ಜನರು ಚಿಕ್ಲಗಿಗೆ ಬಂದರು.
ನಗರವು ಸುಡುತ್ತಿರುವುದನ್ನು ಅವರು ನೋಡಿದರು.
ಅವರ ಹೆಂಡತಿಯರಾಗಲೀ ಗಂಡುಮಕ್ಕಳಾಗಲೀ ಹೆಣ್ಣು
ಮಕ್ಕಳಾಗಲೀ ಅಲ್ಲಿರಲಿಲ್ಲ. ಅಮಾಲೇಕ್ಯರು ಅವರನ್ನು
ಎಳೆದುಕೊಂಡು ಹೋಗಿದ್ದರು. 4ದಾವೀದ ಮತ್ತು ಅವನ
ಸೈನ್ಯದ ಇತರರು ಶಕ್ತಿಮೀರಿ ಜೋರಾಗಿ ಅತ್ತರು.
5ದಾವೀದನ ಇಬ್ಬರು ಹೆಂಡತಿಯರಾದ ಇಜ್ರೇಲನ
ಅಹೀನೋವಮಳನ್ನೂ ಕರ್ಮೆಲಿನ ನಾಬಾಲನ ವಿಧವೆ
ಯಾದ ಅಬೀಗೈಲಳನ್ನೂ ಅಮಾಲೇಕ್ಯರು ಎಳೆದು
ಕೊಂಡು ಹೋಗಿದ್ದರು.
6ಸೈನ್ಯದಲ್ಲಿದ್ದ ಎಲ್ಲರೂ ದುಃಖತಪ್ತರಾಗಿದ್ದರು ಮತ್ತು
ಕೋಪಗೊಂಡಿದ್ದರು; ಯಾಕೆಂದರೆ ಅವರ ಗಂಡು ಮತ್ತು
ಹೆಣ್ಣುಮಕ್ಕಳೆಲ್ಲ ಸೆರೆಯಾಳುಗಳಾಗಿ ಒಯ್ಯಲ್ಪಟ್ಟಿದ್ದರು.
ದಾವೀದನನ್ನು ಕಲ್ಲುಗಳಿಂದ ಕೊಲ್ಲಬೇಕೆಂದು ಅವರು
ಮಾತಾಡಿಕೊಳ್ಳುತ್ತಿದ್ದರು. ದಾವೀದನು ಇದರಿಂದ ತಳ
ಮಳಗೊಂಡರೂ ತನ್ನ ದೇವರಾದ ಯೆಹೋವನಲ್ಲಿ
ತನ್ನನ್ನು ಬಲಪಡಿಸಿಕೊಂಡನು. 7ದಾವೀದನು ಯಾಜಕ
ನಾದ ಎಬ್ಯಾತಾರನಿಗೆ, ''ಏಫೋದನ್ನು ತೆಗೆದುಕೊಂಡು
ಬಾ'' ಎಂದನು. 8ನಂತರ ದಾವೀದನು ಯೆಹೋವನಲ್ಲಿ,
''ನಮ್ಮ ಕುಟುಂಬಗಳನ್ನು ಅಪಹರಿಸಿದ ಜನರನ್ನು ನಾನು
ಅಟ್ಟಿಸಿಕೊಂಡು ಹೋಗಬೇಕೇ? ನಾನು ಅವರನ್ನು ಸೆರೆ
ಹಿಡಿಯುವೆನೇ? '' ಎಂದು ಪ್ರಾರ್ಥಿಸಿದನು.
ಯೆಹೋವನು, ''ಅವರನ್ನು ಅಟ್ಟಿಸಿಕೊಂಡು
ಹೋಗು. ಅವರನ್ನು ನೀನು ಸೆರೆಹಿಡಿಯಬಹುದು. ನಿಮ್ಮ
ಕುಟುಂಬಗಳನ್ನು ನೀವು ರಕ್ಷಿಸಬಹುದು'' ಎಂದು
ಉತ್ತರಿಸಿದನು.

### ದಾವೀದ ಮತ್ತು ಅವನ ಜನರು ಈಜಿಪ್ಟಿನ ಗುಲಾಮನನ್ನು ಕಂಡರು

9-10ದಾವೀದನು ತನ್ನ ಆರುನೂರು ಜನರೊಂದಿಗೆ
ಬೆಸೋರ್ ಹಳ್ಳಕ್ಕೆ ಹೋದನು. ಸುಮಾರು ಇನ್ನೂರು
ಜನರು ಬಹಳ ಆಯಾಸಗೊಂಡು ಬಲಹೀನರಾಗಿದ್ದುದ

ರಿಂದ ಅಲ್ಲಿಯೇ ಉಳಿದರು. ಆದ್ದರಿಂದ ದಾವೀದನು
ಮತ್ತು ಅವನ ನಾನೂರು ಜನರು ಅಮಾಲೇಕ್ಯರನ್ನು
ಅಟ್ಟಿಸಿಕೊಂಡು ಹೋದರು.
[11]ಈಜಿಪ್ಟಿನವನೊಬ್ಬನು ಹೊಲದಲ್ಲಿ ಬಿದ್ದಿರುವುದನ್ನು
ದಾವೀದನ ಜನರು ಕಂಡರು. ಅವರು ಈಜಿಪ್ಟಿನವನನ್ನು
ದಾವೀದನ ಹತ್ತಿರಕ್ಕೆ ತಂದರು. ಅವರು ಈಜಿಪ್ಟಿನವನಿಗೆ
ಕುಡಿಯಲು ನೀರನ್ನು ಮತ್ತು ತಿನ್ನಲು ಆಹಾರವನ್ನು
ಕೊಟ್ಟರು. [12]ಅವರು ಈಜಿಪ್ಟಿನವನಿಗೆ ಅಂಜೂರದ
ಹಣ್ಣಿನ ಉಂಡೆಯನ್ನೂ ಎರಡು ಗೊಂಚಲು ಒಣ ದ್ರಾಕ್ಷಿ
ಯನ್ನೂ ಕೊಟ್ಟರು. ಅವನು ತಿಂದನಂತರ ಚೇತರಿಸಿ
ಕೊಂಡನು. ಅವನು ಮೂರು ಹಗಲು ಮತ್ತು ಮೂರು
ರಾತ್ರಿ ಆಹಾರವನ್ನೇನೂ ತಿಂದಿರಲಿಲ್ಲ; ನೀರನ್ನೂ
ಕುಡಿದಿರಲಿಲ್ಲ.
[13]ದಾವೀದನು ಈಜಿಪ್ಟಿನವನನ್ನು, ''ನಿಮ್ಮ ಒಡೆಯನು
ಯಾರು? ನೀನು ಬಂದಿರುವುದು ಎಲ್ಲಿಂದ?''ಎಂದು
ಕೇಳಿದನು.

ಈಜಿಪ್ಟಿನವನು, ''ನಾನು ಒಬ್ಬ ಈಜಿಪ್ಟಿನವನು ನಾನು
ಒಬ್ಬ ಅಮಾಲೇಕ್ಯನ ಗುಲಾಮನು. ಮೂರು ದಿನಗಳ
ಹಿಂದೆ ನಾನು ಅಸ್ವಸ್ಥನಾಗಿದ್ದರಿಂದ ನಮ್ಮ ಒಡೆಯನು
ನನ್ನನ್ನು ಬಿಟ್ಟುಹೋದನು. [14]ಕೆರೇತ್ಯರು* ವಾಸಿಸುವ
ನೆಗೆವ್ ಮೇಲೆ ನಾವು ಆಕ್ರಮಣ ಮಾಡಿದೆವು. ನಾವು
ಯೆಹೂದ ದೇಶದ ಮೇಲೆ ಮತ್ತು ಕಾಲೇಬ್ಯರು ವಾಸಿಸುವ
ನೆಗೆವ್ ಪ್ರಾಂತ್ಯಗಳ ಮೇಲೆ ಆಕ್ರಮಣ ಮಾಡಿದೆವು.
ನಾವು ಚಿಕ್ಲಗನ್ನು ಸುಟ್ಟುಹಾಕಿದೆವು''ಎಂದು ಹೇಳಿದನು.
[15]ದಾವೀದನು ಈಜಿಪ್ಟಿನವನನ್ನು, ''ನಮ್ಮ ಕುಟುಂಬ
ಗಳನ್ನು ಅಪಹರಿಸಿರುವ ಜನರ ಹತ್ತಿರಕ್ಕೆ ನಮ್ಮನ್ನು ಕರೆದು
ಕೊಂಡು ಹೋಗುವೆಯಾ?'' ಎಂದು ಕೇಳಿದನು.

ಈಜಿಪ್ಟಿನವನು, ''ನೀವು ನನ್ನನ್ನು ಕೊಲ್ಲುವುದಿಲ್ಲ
ವೆಂದು ಇಲ್ಲವೆ ನನ್ನ ಒಡೆಯನಿಗೆ ಮರಳಿ ಒಪ್ಪಿಸುವುದಿಲ್ಲ
ವೆಂದು ದೇವರ ಮುಂದೆ ಪ್ರಮಾಣ ಮಾಡಿರಿ. ಆಗ ನಾನು
ನಿಮ್ಮವರನ್ನು ಕಂಡು ಹಿಡಿಯಲು ಸಹಾಯ
ಮಾಡುತ್ತೇನೆ''ಎಂದು ಹೇಳಿದನು.

## ದಾವೀದನು ಅಮಾಲೇಕ್ಯರನ್ನು ಸೋಲಿಸುವನು

[16]ಈಜಿಪ್ಟಿನವನು ದಾವೀದನನ್ನು ಅಮಾಲೇಕ್ಯರ ಬಳಿಗೆ
ಕರೆದುಕೊಂಡು ಹೋದನು. ಅವರು ತಿನ್ನುತ್ತಾ ಕುಡಿ
ಯುತ್ತಾ ಸುತ್ತುವರಿದು ನೆಲದ ಮೇಲೆ ಬಿದ್ದಿದ್ದರು. ಫಿಲಿಷ್ಟಿ
ಯರ ಮತ್ತು ಯೆಹೂದ್ಯರ ದೇಶದಿಂದ ಸೂರೆಮಾಡಿದ
ವಸ್ತುಗಳಿಂದ ಸಂಭ್ರಮವನ್ನು ಆಚರಿಸುತ್ತಿದ್ದರು.
[17]ದಾವೀದನು ಅವರನ್ನು ಸೋಲಿಸಿ ಅವರನ್ನು
ಕೊಂದನು. ಅವರು ಹೊತ್ತಾರೆಯಿಂದ ಮಾರನೆಯ
ದಿನದ ಸಂಜೆಯವರೆಗೆ ಹೋರಾಡಿದರು. ನಾನೂರು
ಮಂದಿ ಯುವಕರು ತಮ್ಮ ಒಂಟೆಗಳ ಮೇಲಕ್ಕೆ ಹಾರಿ ಓಡಿ
ಹೋದದ್ದನ್ನು ಬಿಟ್ಟರೆ, ಉಳಿದ ಅಮಾಲೇಕ್ಯರಲ್ಲಿ
ಯಾರೂ ತಪ್ಪಿಸಿಕೊಳ್ಳಲಾಗಲಿಲ್ಲ.
[18]ದಾವೀದನು ತನ್ನ ಇಬ್ಬರು ಹೆಂಡತಿಯರನ್ನು ಮರಳಿ
ಪಡೆದನು. ಅಮಾಲೇಕ್ಯರು ಸೂರೆ ಮಾಡಿದ್ದೆಲ್ಲವನ್ನೂ
ದಾವೀದನು ಮತ್ತೆ ಹಿಂದಕ್ಕೆ ಪಡೆದನು. [19]ಏನೂ ಕಳೆದು
ಹೋಗಿರಲಿಲ್ಲ. ಅವರು ತಮ್ಮ ಎಲ್ಲ ಮಕ್ಕಳನ್ನೂ ಮುದುಕ
ರನ್ನೂ ಅವರ ಗಂಡುಹೆಣ್ಣು ಮಕ್ಕಳನ್ನೂ ಮತ್ತೆ ಪಡೆದು
ಕೊಂಡರು. ಅವರು ತಮ್ಮ ಬೆಲೆಬಾಳುವ ವಸ್ತುಗಳನ್ನೂ
ಅಮಾಲೇಕ್ಯರು ತೆಗೆದುಕೊಂಡು ಹೋಗಿದ್ದ ಎಲ್ಲವನ್ನೂ
ಮತ್ತೆ ಪಡೆದುಕೊಂಡರು. ಹೀಗೆ ದಾವೀದನು ಎಲ್ಲವನ್ನೂ
ತೆಗೆದುಕೊಂಡು ಬಂದನು. [20]ದಾವೀದನು ಎಲ್ಲ ಕುರಿ
ಗಳನ್ನು ಮತ್ತು ದನಗಳನ್ನು ತೆಗೆದುಕೊಂಡನು. ಈ
ಪಶುಗಳು ಮುಂದೆ ಹೋಗುವಂತೆ ದಾವೀದನ ಜನರು
ಮಾಡಿದರು. ದಾವೀದನ ಜನರು, ''ಅವು ದಾವೀದನ
ಕೊಡುಗೆಗಳು'' ಎಂದು ಹೇಳಿದರು.

## ಎಲ್ಲರೂ ಸಮಾನವಾಗಿ ಹಂಚಿಕೊಂಡರು

[21]ದಾವೀದನು ತನ್ನ ಇನ್ನೂರು ಮಂದಿ ಉಳಿದು
ಕೊಂಡಿದ್ದ ಬೆಸೋರ್ ಹಳ್ಳಕ್ಕೆ ಬಂದನು. ತಮ್ಮ ಅತಿ
ಯಾದ ಆಯಾಸದಿಂದಲೂ ಬಲಹೀನತೆಯಿಂದಲೂ
ದಾವೀದನನ್ನು ಹಿಂಬಾಲಿಸಲಾಗದ ಜನರೇ ಇವರು.
ದಾವೀದನನ್ನು ಮತ್ತು ಅವನೊಡನೆ ಹೋಗಿದ್ದ
ಸೈನಿಕರನ್ನು ಸಂಧಿಸಲು ಇವರು ಹೊರಗೆ ಬಂದರು.
ದಾವೀದ ಮತ್ತು ಅವನ ಸೈನ್ಯವು ಸಮೀಪಿಸಿದಾಗ,
ಬೆಸೋರ್ ಹಳ್ಳದಲ್ಲಿದ್ದ ಜನರು ಅವರನ್ನು ವಂದಿಸಿದರು.
[22]ಆದರೆ ದಾವೀದನ ಜೊತೆಯಲ್ಲಿ ಹೋಗಿದ್ದ ಜನರ
ಗುಂಪಿನಲ್ಲಿ ಕೆಟ್ಟ ಜನರೂ ಕಿಡಿಗೇಡಿಗಳೂ ಇದ್ದರು. ಆ
ಕೇಡಿಗೇಡಿಗಳು, ''ಈ ಇನ್ನೂರು ಜನರು ನಮ್ಮೊಡನೆ
ಬರಲಿಲ್ಲ. ಆದ್ದರಿಂದ ನಾವು ವಶಪಡಿಸಿಕೊಂಡ ವಸ್ತು
ಗಳಲ್ಲಿ ಯಾವುದನ್ನೂ ಇವರಿಗೆ ಕೊಡುವುದಿಲ್ಲ. ಇವರು
ತಮ್ಮ ಹೆಂಡತಿಯರನ್ನು ಮತ್ತು ಮಕ್ಕಳನ್ನು ಮಾತ್ರ ತೆಗೆದು
ಕೊಳ್ಳಬಹುದು'' ಎಂದು ಹೇಳಿದರು.
[23]ದಾವೀದನು, ''ನನ್ನ ಸಹೋದರರರೇ, ಆ ರೀತಿ ಮಾಡ
ಬೇಡಿ! ಯೆಹೋವನು ನಮಗೆ ದಯಪಾಲಿಸಿರುವುದನ್ನು
ಕುರಿತು ಯೋಚಿಸಿ! ನಮ್ಮ ಮೇಲೆ ಧಾಳಿಮಾಡಿದ
ಶತ್ರುಗಳನ್ನು ಸೋಲಿಸಲು ಯೆಹೋವನು ನಮ್ಮನ್ನು
ನೇಮಿಸಿದನು. [24]ನೀವು ಹೇಳುವುದನ್ನು ಯಾರೂ ಕೇಳು
ವುದಿಲ್ಲ! ಯುದ್ಧಮಾಡುವವನಿಗೆ ಸಿಗುವ ಪಾಲು ಮತ್ತು
ಯುದ್ಧ ಸಾಮಗ್ರಿಗಳನ್ನು ಕಾಯುವವನಿಗೆ ಸಿಗುವ ಪಾಲು

---

**ಕೆರೇತ್ಯರು ಅಥವಾ ''ಕ್ರೇಟಿನ ಜನರು.''** ಬಹುಶಃ ಇವರು ಫಿಲಿಷ್ಟಿಯರು ಇರಬಹುದು.

ಒಂದೇ ಸಮನಾಗಿರಬೇಕು. ಪ್ರತಿಯೊಬ್ಬರ ಪಾಲೂ ಒಂದೇ ಸಮವಾಗಿರಬೇಕು’’ ಎಂದು ಉತ್ತರಿಸಿದನು. 25ಇಸ್ರೇಲಿಗೆ ದಾವೀದನು ಇದನ್ನು ಆಜ್ಞೆಯನ್ನಾಗಿ ಮತ್ತು ನಿಯಮವನ್ನಾಗಿ ಮಾಡಿದನು. ಈ ನಿಯಮವು ಇವತ್ತಿಗೂ ಮುಂದುವರಿಯುತ್ತಿದೆ.

26ದಾವೀದನು ಚಿಕ್ಲಗಿಗೆ ಆಗಮಿಸಿದನು. ನಂತರ ಅವನು ಅಮಾಲೇಕ್ಯರಿಂದ ವಶಪಡಿಸಿಕೊಂಡಿದ್ದ ಕೆಲವು ವಸ್ತುಗಳನ್ನು ಯೆಹೂದದ ಅವನ ಗೆಳೆಯರಿಗೂ ನಾಯಕರಿಗೂ ಕಳುಹಿಸಿದನು. ದಾವೀದನು, ‘‘ಯೆಹೋವನ ಶತ್ರುಗಳಿಂದ ನಾವು ವಶಪಡಿಸಿಕೊಂಡ ವಸ್ತುಗಳ ಕೊಡುಗೆಯು ನಿಮಗಾಗಿ ಇಲ್ಲಿದೆ’’ ಎಂದು ಹೇಳಿದನು.

27ದಾವೀದನು ಅಮಾಲೇಕ್ಯರಿಂದ ವಶಪಡಿಸಿಕೊಂಡ ಕೆಲವು ವಸ್ತುಗಳನ್ನು ಬೇತೇಲಿನವರಿಗೆ, ನೆಗೆವಿನ ರಾಮೋತಿನವರಿಗೆ, ಯತ್ತೀರಿನವರಿಗೆ, 28ಅರೋಯೇರಿನವರಿಗೆ, ಸಿಪ್ಮೋತಿನವರಿಗೆ, ಎಷ್ಟೆಮೋವದವರಿಗೆ, 29ರಾಕಾಲಿನವರಿಗೆ, ಎರಹ್ಮೇಲ್ಯರ ಮತ್ತು ಕೇನ್ಯರ ಪಟ್ಟಣಗಳಿಗೆ, 30ಹೊರ್ಮದವರಿಗೆ, ಬೋರಾಷಾನಿನವರಿಗೆ, ಅತಾಕಿನವರಿಗೆ 31ಮತ್ತು ಹೆಬ್ರೋನಿನವರಿಗೆ ಕಳುಹಿಸಿಕೊಟ್ಟನು ಮತ್ತು ತನ್ನ ಜನರು ಹೋಗಿದ್ದ ಇತರ ಸ್ಥಳಗಳ ನಾಯಕರಿಗೂ ಆ ವಸ್ತುಗಳಲ್ಲಿ ಕೆಲವನ್ನು ಕಳುಹಿಸಿದನು.

## ಸೌಲನ ಮರಣ

31 ಫಿಲಿಷ್ಟಿಯರು ಇಸ್ರೇಲರ ವಿರುದ್ಧ ಹೋರಾಡಿದರು. ಇಸ್ರೇಲರು ಫಿಲಿಷ್ಟಿಯರಿಂದ ಓಡಿಹೋದರು. ಬಹಳ ಜನ ಇಸ್ರೇಲರು ಗಿಲ್ಬೋವ ಶಿಖರದಲ್ಲಿ ಹತರಾದರು. 2ಫಿಲಿಷ್ಟಿಯರು ಸೌಲ ಮತ್ತು ಅವನ ಮಕ್ಕಳೊಂದಿಗೆ ಭೀಕರವಾಗಿ ಹೋರಾಡಿದರು. ಸೌಲನ ಮಕ್ಕಳಾದ ಯೋನಾತಾನ, ಅಬೀನಾದಾಬ ಮತ್ತು ಮಲ್ಕೀಷೂವರನ್ನು ಫಿಲಿಷ್ಟಿಯರು ಕೊಂದರು.

3ಸೌಲನ ವಿರುದ್ಧವಾದ ಈ ಯುದ್ಧವು ಬಹಳ ಘೋರವಾಗಿತ್ತು. ಬಿಲ್ಲುಗಾರರು ಸೌಲನ ಮೇಲೆ ಬಾಣಗಳನ್ನು ಬಿಟ್ಟಿದ್ದರಿಂದ ಸೌಲನು ಬಹಳವಾಗಿ ಗಾಯಗೊಂಡನು. 4ಸೌಲನು ತನ್ನ ಆಯುಧವಾಹಕನಿಗೆ, ‘‘ನಿನ್ನ ಖಡ್ಗದಿಂದ ಇರಿದು ನನ್ನನ್ನು ಕೊಂದುಬಿಡು. ಆಗ, ಈ ಪರದೇಶೀಯರು ನನ್ನನ್ನು ಗಾಯಗೊಳಿಸುವುದಕ್ಕಾಗಲೀ ಅಪಹಾಸ್ಯ ಮಾಡುವುದಕ್ಕಾಗಲೀ ಸಾಧ್ಯವಾಗುವುದಿಲ್ಲ’’ ಎಂದನು. ಆದರೆ ಸೌಲನ ಆಯುಧವಾಹಕನು ನಿರಾಕರಿಸಿದನು. ಸೌಲನ ಸಹಾಯಕನು ಬಹಳ ಭಯಗೊಂಡಿದ್ದನು.

ಆದ್ದರಿಂದ ಸೌಲನು ತನ್ನ ಸ್ವಂತ ಖಡ್ಗದಿಂದಲೇ ಇರಿದು ಆತ್ಮಹತ್ಯೆ ಮಾಡಿಕೊಂಡನು. 5ಸೌಲನು ಸತ್ತುಹೋದದ್ದನ್ನು ಕಂಡ ಆಯುಧವಾಹಕನೂ ತನ್ನ ಖಡ್ಗದಿಂದ ತಾನೂ ಆತ್ಮಹತ್ಯೆ ಮಾಡಿಕೊಂಡನು. ಅವನು ಸೌಲನೊಂದಿಗೆ ಅಲ್ಲಿಯೇ ಸತ್ತುಹೋದನು. 6ಹೀಗೆ ಸೌಲನು ಮತ್ತು ಅವನ ಮೂವರು ಗಂಡುಮಕ್ಕಳೂ ಮತ್ತು ಸೌಲನ ಆಯುಧವಾಹಕನೂ ಅದೇ ದಿನ ಸತ್ತುಹೋದರು.

## ಸೌಲನ ದೇಹವು ಫಿಲಿಷ್ಟಿಯರಿಗೆ ಸಿಕ್ಕಿತು

7ಇಸ್ರೇಲರ ಸೈನ್ಯವು ಓಡಿಹೋಗುತ್ತಿರುವುದನ್ನು ಕಣಿವೆಯ ಮತ್ತೊಂದು ಪಕ್ಕದಲ್ಲಿ ವಾಸಮಾಡುತ್ತಿದ್ದ ಇಸ್ರೇಲರು ನೋಡಿದರು. ಸೌಲನು ಮತ್ತು ಅವನ ಮಕ್ಕಳು ಸತ್ತದ್ದನ್ನೂ ಅವರು ನೋಡಿದರು. ಆದುದರಿಂದ ಆ ಇಸ್ರೇಲರು ತಮ್ಮ ನಗರಗಳನ್ನು ಬಿಟ್ಟು ಓಡಿಹೋದರು. ನಂತರ ಫಿಲಿಷ್ಟಿಯರು ಬಂದು ಆ ನಗರಗಳನ್ನು ವಶಪಡಿಸಿಕೊಂಡು ನೆಲೆಸಿದರು.

8ಮಾರನೆಯ ದಿನ, ಸತ್ತದೇಹಗಳಿಂದ ವಸ್ತುಗಳನ್ನು ದೋಚಲು ಫಿಲಿಷ್ಟಿಯರು ಬಂದರು. ಸೌಲನು ಮತ್ತು ಅವನ ಮೂರು ಜನ ಮಕ್ಕಳು ಗಿಲ್ಬೋವ ಶಿಖರದಲ್ಲಿ ಸತ್ತಿರುವುದನ್ನು ಅವರು ನೋಡಿದರು. 9ಸೌಲನ ತಲೆಯನ್ನು ಫಿಲಿಷ್ಟಿಯರು ಕಡಿದುಹಾಕಿದರು. ಮತ್ತು ಅವನ ಆಯುಧಗಳನ್ನು ತೆಗೆದುಕೊಂಡರು. ಫಿಲಿಷ್ಟಿಯ ಜನರಿಗೆ ಮತ್ತು ಅವರ ವಿಗ್ರಹಗಳ ಗುಡಿಗೆ ಈ ವಿಜಯದ ವಾರ್ತೆಯನ್ನು ಕಳುಹಿಸಿದರು. 10ಅಷ್ಟೋರೆತಳ ದೇವಾಲಯದಲ್ಲಿ ಅವರು ಸೌಲನ ಆಯುಧಗಳನ್ನು ಇಟ್ಟರು. ಫಿಲಿಷ್ಟಿಯರು ಸೌಲನ ದೇಹವನ್ನು ಬೇತ್‌ಷೆಯಾನಿನ ಗೋಡೆಗೆ ನೇತುಹಾಕಿದರು.

11ಫಿಲಿಷ್ಟಿಯರು ಸೌಲನಿಗೆ ಏನೇನು ಮಾಡಿದರೆಂಬುದನ್ನು ಯಾಬೇಷ್‌ಗಿಲ್ಯಾದಿನಲ್ಲಿ ವಾಸಿಸುತ್ತಿದ್ದ ಜನರೆಲ್ಲ ತಿಳಿದುಕೊಂಡರು. 12ಆದುದರಿಂದ ಯಾಬೇಷಿನ ಸೈನಿಕರೆಲ್ಲ ಬೇತ್‌ಷೆಯಾನಿಗೆ ಹೋದರು. ಅವರು ರಾತ್ರಿಯೆಲ್ಲಾ ನಡೆದರು! ನಂತರ ಅವರು ಬೇತ್‌ಷೆಯಾನಿನ ಗೋಡೆಯಲ್ಲಿದ್ದ ಸೌಲನ ದೇಹವನ್ನು ಇಳಿಸಿದರು. ನಂತರ ಅವರು ಸೌಲನ ಗಂಡುಮಕ್ಕಳ ದೇಹಗಳನ್ನೂ ಇಳಿಸಿದರು. ನಂತರ ಅವರು ಆ ದೇಹಗಳನ್ನು ಯಾಬೇಷಿಗೆ ತೆಗೆದುಕೊಂಡು ಹೋದರು. ಸೌಲ ಮತ್ತು ಅವನ ಮೂವರು ಗಂಡುಮಕ್ಕಳ ದೇಹಗಳನ್ನು ಯಾಬೇಷಿನ ಜನರು ಅಲ್ಲಿ ದಹಿಸಿಬಿಟ್ಟರು. 13ನಂತರ ಈ ಜನರು ಸೌಲ ಮತ್ತು ಅವನ ಮೂರು ಮಕ್ಕಳ ಮೂಳೆಗಳನ್ನು ತೆಗೆದುಕೊಂಡು, ಅವುಗಳನ್ನು ಯಾಬೇಷಿನ ಮರದ ಕೆಳಗೆ ಸಮಾಧಿ ಮಾಡಿದರು. ನಂತರ ಯಾಬೇಷಿನ ಜನರು ದುಃಖದಿಂದ ಏಳು ದಿನಗಳ ಕಾಲ ಉಪವಾಸ ಮಾಡಿದರು.*

---

**ಏಳು ದಿನಗಳ ಕಾಲ ಉಪವಾಸ ಮಾಡಿದರು** ಸೌಲನ ಮರಣಕ್ಕಾಗಿ ತೀವ್ರ ಸಂತಾಪವನ್ನು ವ್ಯಕ್ತಪಡಿಸಲು ಅನುಸರಿಸಿದ ಮಾರ್ಗ. ಅವರ ನಗರವನ್ನು ಸೌಲನು ರಕ್ಷಿಸಿದನೆಂಬುದನ್ನು ಅವರು ಎಂದೆಂದಿಗೂ ಮರೆಯುವುದಿಲ್ಲ.

# 2 ಸಮುವೇಲನು

### ಸೌಲನ ಮರಣದ ಬಗ್ಗೆ ದಾವೀದನಿಗೆ ವಾರ್ತೆ

1 ದಾವೀದನು ಅಮಾಲೇಕ್ಯರನ್ನು ಸೋಲಿಸಿದ ಬಳಿಕ,
ಚಿಕ್ಲಗಿಗೆ ಹಿಂದಿರುಗಿ ಬಂದು, ಅಲ್ಲಿ ಎರಡು ದಿವಸ
ಇದ್ದನು. ಸೌಲನ ಮರಣಾನಂತರ ಇದು ಸಂಭವಿಸಿತು.
2ಮೂರನೆಯ ದಿನ ಒಬ್ಬ ಯುವಕನು ಚಿಕ್ಲಗಿಗೆ ಬಂದನು.
ಈ ಮನುಷ್ಯನು ಸೌಲನಿದ್ದ ಪಾಳೆಯದಿಂದ ಬಂದವನು.
ಅವನು ಬಟ್ಟೆಗಳೆಲ್ಲವನ್ನು ಹರಿದುಕೊಂಡಿದ್ದನು; ತಲೆಯ
ಮೇಲೆ ಧೂಳನ್ನು ಹಾಕಿಕೊಂಡಿದ್ದನು.* ಆವನು
ದಾವೀದನ ಬಳಿಗೆ ಬಂದು ಅವನ ಮುಂದೆ, ತನ್ನ
ತಲೆಯನ್ನು ನೆಲಕ್ಕೆ ಬಾಗಿಸಿ ನಮಸ್ಕರಿಸಿದನು.
3ದಾವೀದನು ಅವನಿಗೆ, ‘‘ನೀನು ಎಲ್ಲಿಂದ ಬಂದೆ?’’
ಎಂದು ಅವನನ್ನು ಕೇಳಿದನು.

ಅದಕ್ಕೆ ಅವನು, ‘‘ನಾನು ಇಸ್ರೇಲರ ಪಾಳೆಯದಿಂದ
ತಪ್ಪಿಸಿಕೊಂಡು ಬಂದೆ’’ ಎಂದು ಹೇಳಿದನು.
4ದಾವೀದನು ಅವನನ್ನು, ‘‘ಯುದ್ಧದಲ್ಲಿ ಯಾರು
ಗೆದ್ದರು, ನನಗೆ ದಯವಿಟ್ಟು ತಿಳಿಸು’’ ಎಂದು ಕೇಳಿದನು.

ಅವನು, ‘‘ಇಸ್ರೇಲ್ ಜನರು ಯುದ್ಧರಂಗದಿಂದ ಓಡಿ
ಹೋದರು. ಯುದ್ಧದಲ್ಲಿ ಅನೇಕರು ಸತ್ತುಹೋದರು.
ಸೌಲನು ಮತ್ತು ಅವನ ಮಗನಾದ ಯೋನಾತಾನನು
ಸತ್ತರು’’ಎಂದು ಹೇಳಿದನು.
5ದಾವೀದನು ಆ ಯುವಕನಿಗೆ, ‘‘ಸೌಲನು ಮತ್ತು
ಅವನ ಮಗನಾದ ಯೋನಾತಾನನು ಸತ್ತರೆಂದು ನಿನಗೆ
ಹೇಗೆ ತಿಳಿಯಿತು’’ಎಂದು ಕೇಳಿದನು.
6ಅದಕ್ಕೆ ಆ ಯುವಕನು, ‘‘ನಾನು ಗಿಲ್ಬೋವದ ಶಿಖರದ
ಮೇಲಿದ್ದೆ. ಸೌಲನು ತನ್ನ ಭರ್ಜಿಯ ಮೇಲೆ ಒರಗಿ
ಕೊಂಡಿದ್ದನ್ನು ಅಲ್ಲಿಂದಲೇ ನಾನು ನೋಡಿದೆ. ಫಿಲಿಷ್ಟಿ
ಯರ ರಥಗಳು ಮತ್ತು ಕುದುರೆಸವಾರರು ಸೌಲನ ಹತ್ತಿ
ರಕ್ಕೆ ಬರುತ್ತಿದ್ದರು. 7ಸೌಲನು ಹಿಂದಿರುಗಿ ನೋಡಿದಾಗ
ಅವನಿಗೆ ನಾನು ಕಾಣಿಸಿದೆನು. ಅವನು ನನ್ನನ್ನು ಕರೆದಾಗ,
‘ಇಗೋ ಬಂದೆನು’ ಎಂದು ಉತ್ತರಿಸಿದೆನು. 8ನಂತರ
ಸೌಲನು, ‘ನೀನು ಯಾರು?’ ಎಂದು ಕೇಳಿದನು.
‘ನಾನೊಬ್ಬ ಅಮಾಲೇಕ್ಯನು’ ಎಂದು ನಾನು ಹೇಳಿದೆನು.
9ಸೌಲನು ನನಗೆ, ‘ದಯವಿಟ್ಟು ನನ್ನನ್ನು ಕೊಂದುಬಿಡು.
ನಾನು ಬಹು ಸಂಕಟದಲ್ಲಿದ್ದೇನೆ. ನಾನು ಈಗಾಗಲೇ
ಸತ್ತವನಂತಿದ್ದೇನೆ’ ಎಂದನು.
10ಆದ್ದರಿಂದ ನಾನು ಅವನನ್ನು ಕೊಂದೆನು. ಅವನು
ಮತ್ತೆ ಜೀವದಿಂದ ಉಳಿಯಲಾರದಷ್ಟು ಗಾಯ
ಗೊಂಡಿದ್ದಾನೆಂಬುದು ನನಗೆ ತಿಳಿದಿತ್ತು. ನಂತರ ನಾನು
ಅವನ ತಲೆಯಿಂದ ಕಿರೀಟವನ್ನೂ ಮತ್ತು ತೋಳಿನ ಕವಚ
ವನ್ನೂ ತೆಗೆದುಕೊಂಡೆನು. ನನ್ನ ಒಡೆಯನೇ, ನಾನು ಆ
ಕಿರೀಟವನ್ನು ಮತ್ತು ತೋಳಿನ ಕವಚವನ್ನು ನಿನ್ನ ಬಳಿಗೆ
ತಂದಿದ್ದೇನೆ’’ ಎಂದು ಹೇಳಿದನು.
11ಆಗ ದಾವೀದನು ದುಃಖದಿಂದ ತನ್ನ ಬಟ್ಟೆಗಳನ್ನೆಲ್ಲ
ಹರಿದುಕೊಂಡನು. ದಾವೀದನ ಜೊತೆಯಲ್ಲಿದ್ದವರೂ
ತಮ್ಮ ಬಟ್ಟೆಗಳನ್ನು ಹರಿದುಕೊಂಡರು. 12ಅವರು ಬಹಳ
ದುಃಖದಿಂದ ಅತ್ತರು. ಅವರು ಸಂಜೆಯ ತನಕ ಏನನ್ನೂ
ತಿನ್ನಲಿಲ್ಲ. ಸೌಲನೂ ಅವನ ಮಗನಾದ ಯೋನಾತಾ
ನನೂ ಯೆಹೋವನ ಜನರೂ ಸತ್ತದ್ದಕ್ಕಾಗಿ ಮತ್ತು
ಇಸ್ರೇಲಿಗಾಗಿ ದಾವೀದನು ಮತ್ತು ಅವನ ಜನರು ಅತ್ತರು.
ಸೌಲನನ್ನೂ ಅವನ ಮಗನಾದ ಯೋನಾತಾನನನ್ನೂ
ಮತ್ತು ಅನೇಕ ಮಂದಿ ಇಸ್ರೇಲರನ್ನೂ ಖಡ್ಗಗಳಿಂದ
ಇರಿದು ಕೊಂದದ್ದಕ್ಕಾಗಿ ಅವರು ಅತ್ತರು.

### ಅಮಾಲೇಕ್ಯನನ್ನು ಕೊಲ್ಲಲು ದಾವೀದನ ಆಜ್ಞೆ

13ಸೌಲನ ಮರಣದ ಬಗ್ಗೆ ತಿಳಿಸಿದ ಯುವಕನಿಗೆ
ದಾವೀದನು, ‘‘ನೀನು ಎಲ್ಲಿಂದ ಬಂದಿರುವೆ?’’ ಎಂದು
ಕೇಳಿದನು. ಆ ಯುವಕನು, ‘‘ನಾನು ಇಸ್ರೇಲ್ ಜನರಲ್ಲಿ
ವಾಸಿಸುತ್ತಿರುವ ವಿದೇಶೀಯನ ಮಗ. ನಾನೊಬ್ಬ
ಅಮಾಲೇಕ್ಯನು’’ ಎಂದು ಉತ್ತರಿಸಿದನು.
14ದಾವೀದನು ಆ ಯುವಕನಿಗೆ, ‘‘ಯೆಹೋವನಿಂದ
ಆರಿಸಲ್ಪಟ್ಟ ರಾಜನನ್ನು ಕೊಲ್ಲಲು ನೀನು ಹೆದರಲಿಲ್ಲ
ವೇಕೆ?’’ ಎಂದು ಕೇಳಿದನು.
15-16ನಂತರ ದಾವೀದನು ತನ್ನ ಗುಂಪಿನ ಯುವಕ
ನೊಬ್ಬನನ್ನು ಕರೆದು, ‘‘ನೀನು ಹೋಗಿ ಆ ಅಮಾಲೇಕ್ಯ
ನನ್ನು ಕೊಲ್ಲು’’ ಎಂದು ಹೇಳಿದನು. ಇಸ್ರೇಲರ
ಯುವಕನು ಆ ಅಮಾಲೇಕ್ಯನನ್ನು ಕೊಂದುಬಿಟ್ಟನು.

---

**ತಲೆಯ ಮೇಲೆ ಧೂಳನ್ನು ಹಾಕಿಕೊಂಡಿದ್ದನು** ಚಿಂದಿಯಾದ ಬಟ್ಟೆಗಳು ಮತ್ತು ತಲೆಯ ಮೇಲಿರುವ ಧೂಳು ಬಹಳ ದುಃಖದ ಸಂಕೇತಗಳು.

ದಾವೀದನು ಆ ಅಮಾಲೇಕ್ಯನಿಗೆ, ''ನಿನ್ನ ಸಾವಿಗೆ ನೀನೇ ಕಾರಣನು.* ನೀನು ನಿನ್ನ ವಿರುದ್ಧವೇ ಸಾಕ್ಷಿ ಹೇಳಿದೆ. 'ಯೆಹೋವನಿಂದ ಆರಿಸಲ್ಪಟ್ಟ ರಾಜನನ್ನು ನಾನು ಕೊಂದೆ' ಎಂದು ನೀನೇ ಹೇಳಿದೆ'' ಎಂದನು.

### ಸೌಲನನ್ನು ಮತ್ತು ಯೋನಾತಾನನನ್ನು ಕುರಿತು ದಾವೀದನ ಶೋಕಗೀತೆ

17 ದಾವೀದನು, ಸೌಲನನ್ನು ಮತ್ತು ಅವನ ಮಗನಾದ ಯೋನಾತಾನನನ್ನು ಕುರಿತು ಒಂದು ಶೋಕಗೀತೆಯನ್ನು ಹಾಡಿದನು.
18 ಈ ಶೋಕಗೀತೆಯನ್ನು ಯೆಹೂದದ ಜನರಿಗೆ ಕಲಿಸಬೇಕೆಂದು ಅವನು ತನ್ನ ಜನರಿಗೆ ಹೇಳಿದನು. ಈ ಗೀತೆಗೆ ''ಬಿಲ್ಲು'' ಎಂದು ಹೆಸರು. ಈ ಗೀತೆಯನ್ನು ಯಾಷಾರ್ ಗ್ರಂಥದಲ್ಲಿ * ಬರೆಯಲಾಗಿದೆ.

19 ''ಇಸ್ರೇಲೇ, ನಿನ್ನ ಸೌಂದರ್ಯವೆಲ್ಲ ಉನ್ನತ ಸ್ಥಳಗಳಲ್ಲಿ ನಾಶವಾಯಿತು. ಬಲಶಾಲಿಗಳಾದ ಜನರೆಲ್ಲ ಬಿದ್ದು ಹೋದರು.
20 ಗತ್‌ನಲ್ಲಿ* ಈ ಸುದ್ದಿಯನ್ನು ಹೇಳದಿರು. ಅಷ್ಕೆಲೋನಿನ* ಬೀದಿಗಳಲ್ಲಿ ಇದನ್ನು ಸಾರದಿರು. ಫಿಲಿಷ್ಟಿಯರ ಪಟ್ಟಣಗಳೆಲ್ಲಾ ಸಂತೋಷಪಡುವವು. ಆ ವಿದೇಶಿಯರ ಹೆಣ್ಣು ಮಕ್ಕಳು ಉಲ್ಲಾಸ ಪಡುವರು.
21 ಗಿಲ್ಬೋವದ ಪರ್ವತಗಳಲ್ಲಿ ಮಂಜೂ ಮಳೆಯೂ ಸುರಿಯದಿರಲಿ. ಆ ಹೊಲಗಳಿಂದ ಕಾಣಿಕೆಯ ವಸ್ತುಗಳೂ ಬಾರದಿರಲಿ. ಅಲ್ಲಿನ ಶಕ್ತಿಸಂಪನ್ನರ ಗುರಾಣಿಗಳೆಲ್ಲ ತುಕ್ಕುಹಿಡಿದಿವೆ ಸೌಲನ ಗುರಾಣಿಯು ಎಣ್ಣೆಯಿಲ್ಲದೆ ಬಿದ್ದಿದೆ.*
22 ಯೋನಾತಾನನ ಬಿಲ್ಲು ತನ್ನ ಪಾಲಿನ ಶತ್ರುಗಳನ್ನು ಸಂಹರಿಸಿತು. ಸೌಲನ ಖಡ್ಗವು ತನ್ನ ಪಾಲಿನ ಶತ್ರುಗಳನ್ನು ಸಂಹರಿಸಿತು. ಈಗ ಸತ್ತುಬಿದ್ದಿರುವ ಸೈನಿಕರ ರಕ್ತವನ್ನು ಅವರ ಆಯುಧಗಳು ಚಿಮ್ಮಿಸಿದವು. ಅವರ ಆಯುಧಗಳು ಬಲಿಷ್ಠರ ಕೊಬ್ಬನ್ನು ಕತ್ತರಿಸಿ ಹಾಕಿದವು.
23 ಸೌಲನು ಮತ್ತು ಯೋನಾತಾನನು ಒಬ್ಬರನ್ನೊಬ್ಬರು ಪ್ರೀತಿಸಿದರು; ತಮ್ಮ ಪರಸ್ಪರ ಜೀವಿತದಲ್ಲಿ ಆನಂದಿಸಿದರು. ಸೌಲನು ಮತ್ತು ಯೋನಾತಾನನು ಮರಣದಲ್ಲೂ ಒಂದಾದರು. ಅವರು ಹದ್ದುಗಳಿಗಿಂತ ವೇಗವಾಗಿ ಹೋದರು; ಸಿಂಹಗಳಿಗಿಂತ ಶಕ್ತಿಶಾಲಿಗಳಾಗಿದ್ದರು.
24 ಇಸ್ರೇಲಿನ ಕುವರಿಯರೇ, ಸೌಲನಿಗಾಗಿ ಗೋಳಾಡಿರಿ! ಸೌಲನು ನಿಮಗೆ ಕೆಂಪು ಬಟ್ಟೆಗಳನ್ನು ಉಡಿಸಿದನು. ಸೌಲನು ಸುವರ್ಣಾಭರಣಗಳನ್ನು ಬಟ್ಟೆಗಳ ಮೇಲೆ ತೊಡಿಸಿದನು.
25 ಬಲಶಾಲಿಗಳಾದ ಜನರೆಲ್ಲ ಯುದ್ಧದಲ್ಲಿ ಮಡಿದರು. ಗಿಲ್ಬೋವ ಪರ್ವತಗಳಲ್ಲಿ ಯೋನಾತಾನನೂ ಮಡಿದನು.
26 ಸೋದರನಾದ ಯೋನಾತಾನನೇ, ನಿನಗಾಗಿ ನಾನು ದುಃಖಿಸುವೆ! ನಿನ್ನ ಗೆಳೆತನವು ನನಗೆ ಉಲ್ಲಾಸದಾಯಕವಾಗಿತ್ತು. ನನ್ನ ಮೇಲಿನ ನಿನ್ನ ಪ್ರೀತಿಯು ಸ್ತ್ರೀಯರ ಪ್ರೀತಿಗಿಂತಲೂ ಅತಿಶಯವಾಗಿತ್ತು.
27 ಬಲಶಾಲಿಗಳಾದ ಜನರೆಲ್ಲ ಯುದ್ಧದಲ್ಲಿ ಮಡಿದರು. ಯುದ್ಧಾಯುಧಗಳೆಲ್ಲ ಹೊರಟು ಹೋದವು.''

### ಹೆಬ್ರೋನಿಗೆ ದಾವೀದನ ಆಗಮನ

2 ತರುವಾಯ ದಾವೀದನು ಯೆಹೋವನಲ್ಲಿ ಪ್ರಾರ್ಥಿಸಿ, ''ಯೆಹೂದದ ಯಾವುದಾದರೂ ನಗರಕ್ಕೆ ನಾನು ಹೋಗಬಹುದೇ?'' ಎಂದು ಕೇಳಿದನು.

''ಹೋಗು'' ಎಂಬುದಾಗಿ ಯೆಹೋವನು ಹೇಳಿದನು.

''ನಾನು ಎಲ್ಲಿಗೆ ಹೋಗಲಿ?'' ಎಂದು ದಾವೀದನು ಕೇಳಿದನು.

''ಹೆಬ್ರೋನಿಗೆ ಹೋಗು'' ಎಂದು ಯೆಹೋವನು ಉತ್ತರಿಸಿದನು.

2 ಆದ್ದರಿಂದ ದಾವೀದನು ಅಲ್ಲಿಗೆ ಹೋದನು. ಅವನ ಇಬ್ಬರು ಹೆಂಡತಿಯರೂ ಅವನ ಜೊತೆಯಲ್ಲಿ ಹೋದರು. ಅವರು ಯಾರೆಂದರೆ: ಇಜ್ರೇಲಿನ ಅಹೀನೋವಮಳು ಮತ್ತು ಕರ್ಮೆಲಿನ ನಾಬಾಲನ ವಿಧವೆಯಾದ ಅಬೀಗೈಲಳು.
3 ದಾವೀದನು ತನ್ನ ಜನರನ್ನು ಮತ್ತು ಅವರ ಕುಟುಂಬಗಳನ್ನು ಸಹ ಕರೆತಂದನು. ಅವರೆಲ್ಲರೂ ಹೆಬ್ರೋನ್ ಮತ್ತು ಅದರ ಸಮೀಪದ ನಗರಗಳಲ್ಲಿ ನೆಲೆಸಿದರು.

### ಯಾಬೇಷಿನ ಜನರನ್ನು ದಾವೀದನು ಅಭಿನಂದಿಸುವನು

4 ಯೆಹೂದದ ಜನರು ಬಂದು ದಾವೀದನನ್ನು ಯೆಹೂದದ ರಾಜನನ್ನಾಗಿ ಅಭಿಷೇಕಿಸಿದರು. ಬಳಿಕ ಅವರು ದಾವೀದನಿಗೆ, ''ಸೌಲನ ಸಮಾಧಿಮಾಡಿದವರು ಯಾಬೇಷ್‌ಗಿಲ್ಯಾದಿನವರೇ'' ಎಂದು ಹೇಳಿದರು.

---

**ನಿನ್ನ ಸಾವಿಗೆ ನೀನೇ ಕಾರಣನು** ಅಕ್ಷರಶಃ, ''ನಿನ್ನ ರಕ್ತವು ನಿನ್ನ ತಲೆಯ ಮೇಲೆ ಇರಲಿ'' ಎಂದು.

**ಯಾಷಾರ್ ಗ್ರಂಥ** ಇಸ್ರೇಲರ ಯುದ್ಧಗಳನ್ನು ಕುರಿತಂತೆ ಕೊನೆಯ ಪ್ರಾಚೀನ ಗ್ರಂಥ.

**ಗತ್** ಫಿಲಿಷ್ಟಿಯರ ರಾಜಧಾನಿಯಾಗಿದ್ದಿತು.

**ಅಷ್ಕೆಲೋನ್** ಫಿಲಿಷ್ಟಿಯರ ಐದು ರಾಜ್ಯಗಳಲ್ಲಿ ಒಂದು.

**ಸೌಲನ ಗುರಾಣಿಯು ಎಣ್ಣೆಯಿಲ್ಲದೆ ಬಿದ್ದಿದೆ** ಸೌಲನ ಗುರಾಣಿಯು ಎಣ್ಣೆಯಿಂದ ಅಭಿಷಿಕ್ತವಾಗಿಲ್ಲ.

[5]ಯಾಬೇಷ್‌ಗಿಲ್ಯಾದಿನ ಜನರಿಗೆ ದಾವೀದನು
ಸಂದೇಶಕರನ್ನು ಕಳುಹಿಸಿದನು. ಈ ಸಂದೇಶಕರು
ಯಾಬೇಷ್‌ನ ಜನರಿಗೆ, ''ಸೌಲನ ದೇಹದ ಬೂದಿ
ಯನ್ನು * ಸಮಾಧಿಮಾಡುವುದರ ಮೂಲಕ ನೀವು ನಿಮ್ಮ
ಒಡೆಯನಾದ ಸೌಲನಿಗೆ ಕರುಣೆ ತೋರಿದ್ದೀರಿ. ಅದಕ್ಕಾಗಿ
ಯೆಹೋವನು ನಿಮ್ಮನ್ನು ಆಶೀರ್ವದಿಸಲಿ. [6]ಆತನು
ನಿಮಗೆ ಕೃಪಾಳುವೂ ನಂಬಿಗಸ್ತನೂ ಆಗಿರಲಿ. ನೀವು
ಸೌಲನ ಬೂದಿಯನ್ನು ಸಮಾಧಿಮಾಡಿದ್ದರಿಂದ ನಾನೂ
ನಿಮಗೆ ಕರುಣೆತೋರಿಸುವೆನು. [7]ನಿಮ್ಮ ಒಡೆಯನಾದ
ಸೌಲನು ಮರಣ ಹೊಂದಿರುವುದರಿಂದ, ಯೆಹೂದ
ಕುಲದವರು ನನ್ನನ್ನು ತಮ್ಮ ರಾಜನನ್ನಾಗಿ ಅಭಿಷೇಕಿಸಿ
ದ್ದಾರೆ. ಆದ್ದರಿಂದ ನೀವು ಬಲಿಷ್ಠರಾಗಿರಿ ಮತ್ತು ಧೈರ್ಯ
ದಿಂದಿರಿ'' ಎಂದು ಹೇಳಿದರು.

### ಈಷ್ಬೋಶೆತನು ರಾಜನಾದನು

[8]ಸೌಲನ ಸೈನ್ಯದಲ್ಲಿ ನೇರನ ಮಗನಾದ ಅಬ್ನೇರನು
ಸೇನಾಧಿಪತಿಯಾಗಿದ್ದನು. ಸೌಲನ ಮಗನಾದ
ಈಷ್ಬೋಶೆತನನ್ನು ಅಬ್ನೇರನು ಮಹನಯಿಮಿಗೆ ಕರೆ
ದೊಯ್ದನು. [9]ಆ ಸ್ಥಳದಲ್ಲಿ ಅಬ್ನೇರನು ಈಷ್ಬೋಶೆತನನ್ನು
ಗಿಲ್ಯಾದ್, ಅಶೇರ್, ಇಜ್ರೇಲ್, ಎಫ್ರಾಯೀಮ್ ಮತ್ತು
ಬೆನ್ಯಾಮೀನ್ ಜನರ ಮೇಲೆಯೂ ಮತ್ತು ಇಸ್ರೇಲಿಗೆಲ್ಲ
ರಾಜನನ್ನಾಗಿ ಮಾಡಿದನು.

[10]ಈಷ್ಬೋಶೆತನು ಸೌಲನ ಮಗ. ಈಷ್ಬೋಶೆತನು
ಇಸ್ರೇಲನ್ನು ಆಳಲು ಆರಂಭಿಸಿದಾಗ ನಲವತ್ತು ವರ್ಷ
ವಯಸ್ಸಿನವನಾಗಿದ್ದನು. ಅವನು ಎರಡು ವರ್ಷ ಆಳಿ
ದನು. ಆದರೆ ಯೆಹೂದ ಕುಲದವರು ದಾವೀದನನ್ನು
ಹಿಂಬಾಲಿಸಿದರು. [11]ದಾವೀದನು ಯೆಹೂದ ಕುಲದವ
ರಿಗೆ ಹೆಬ್ರೋನಿನಲ್ಲಿ ಏಳು ವರ್ಷ ಆರು ತಿಂಗಳುಗಳ ಕಾಲ
ರಾಜನಾಗಿದ್ದನು.

### ಈಷ್ಬೋಶೆತನ ಜನರು ಮತ್ತು ದಾವೀದನ ಜನರು ಪರಸ್ಪರ ಹೋರಾಡಿದರು

[12]ನೇರನ ಮಗನಾದ ಅಬ್ನೇರನೂ ಮತ್ತು ಸೌಲನ
ಮಗನಾದ ಈಷ್ಬೋಶೆತನ ಸೇವಕರೂ ಮಹನಯಿಮಿ
ಯನ್ನು ಬಿಟ್ಟು ಗಿಬ್ಯೋನಿಗೆ ಹೋದರು. [13]ಚೆರೂಯಳ
ಮಗನಾದ ಯೋವಾಬನು ಮತ್ತು ದಾವೀದನ ಸೈನಿಕರು
ಸಹ ಗಿಬ್ಯೋನಿಗೆ ಹೋದರು. ಅವರು ಅಬ್ನೇರನನ್ನು
ಮತ್ತು ಈಷ್ಬೋಶೆತನ ಸೇವಕರನ್ನು ಗಿಬ್ಯೋನಿನ ಕೆರೆಯ
ಹತ್ತಿರ ಸಂಧಿಸಿದರು. ಅಬ್ನೇರನ ಗುಂಪಿನವರು ಕೆರೆಯ
ಒಂದು ಕಡೆ ಕುಳಿತರು. ಯೋವಾಬನ ಗುಂಪಿನವರು
ಕೆರೆಯ ಮತ್ತೊಂದು ಕಡೆ ಕುಳಿತರು.

[14]ಅಬ್ನೇರನು ಯೋವಾಬನಿಗೆ, '' ಯುವಜನರೆಲ್ಲ
ಮೇಲೆದ್ದು, ಇಲ್ಲಿ ಹೋರಾಡಲಿ'' ಎಂದು ಹೇಳಿದನು.
ಯೋವಾಬನು ''ಆಗಲಿ, ಅವರು ಹೋರಾಡಲಿ''
ಎಂದನು.

[15]ನಂತರ ಯುವಜನರು ಮೇಲೆದ್ದರು. ಎರಡು ಗುಂಪಿ
ನವರೂ ಹೋರಾಡುವುದಕ್ಕಾಗಿ ತಮ್ಮತಮ್ಮ ಜನರನ್ನು
ಲೆಕ್ಕಹಾಕಿದರು. ಸೌಲನ ಮಗನಾದ ಈಷ್ಬೋಶೆತನಿಗಾಗಿ
ಬೆನ್ಯಾಮೀನ್ ಕುಲದ ಹನ್ನೆರಡು ಜನರನ್ನು ಆರಿಸ
ಲಾಯಿತು. ದಾವೀದನ ಸೇವಕರಲ್ಲಿ ಹನ್ನೆರಡು ಜನರನ್ನು
ಆರಿಸಲಾಯಿತು. [16]ಪ್ರತಿಯೊಬ್ಬರೂ ತಮ್ಮ ಎದುರಾ
ಳಿಯ ತಲೆಯನ್ನು ಹಿಡಿದುಕೊಂಡರು ಮತ್ತು ಖಡ್ಗದಿಂದ
ಅವರ ಪಕ್ಕೆಗಳಿಗೆ ತಿವಿದರು. ಆದ್ದರಿಂದ ಅವರು ಒಟ್ಟಾಗಿ
ಕೆಳಕ್ಕೆ ಬಿದ್ದರು. ಆದಕಾರಣವೇ ಆ ಸ್ಥಳವನ್ನು ''ಹರಿತ
ಕತ್ತಿಯ ಹೊಲ'' ಎಂದು ಕರೆಯುತ್ತಾರೆ. ಈ ಸ್ಥಳವು
ಗಿಬ್ಯೋನಿನಲ್ಲಿದೆ. [17]ಆ ದಿನ ಘೋರವಾದ ಯುದ್ಧ
ಸಂಭವಿಸಿತು. ದಾವೀದನ ಸೇವಕರು ಅಬ್ನೇರನನ್ನು ಮತ್ತು
ಇಸ್ರೇಲರನ್ನು ಸೋಲಿಸಿದರು.

### ಅಸಾಹೇಲನನ್ನು ಅಬ್ನೇರನು ಕೊಲ್ಲುವನು

[18]ಚೆರೂಯಳಿಗೆ ಯೋವಾಬ್, ಅಬೀಷೈ ಮತ್ತು
ಅಸಾಹೇಲ್ ಎಂಬ ಮೂವರು ಮಕ್ಕಳಿದ್ದರು.
ಅಸಾಹೇಲನು ವೇಗದ ಓಟಗಾರ. ಅವನು ಕಾಡಿನ ಜಿಂಕೆ
ಯಂತೆ ವೇಗವಾಗಿ ಓಡಬಲ್ಲವನಾಗಿದ್ದನು.
[19]ಅಸಾಹೇಲನು ಯಾವ ಕಡೆಗೂ ತಿರುಗದೆ ನೇರವಾಗಿ
ಅಬ್ನೇರನ ಕಡೆಗೆ ಹೋದನು. [20]ಅಬ್ನೇರನು ಹಿಂದಕ್ಕೆ
ತಿರುಗಿ, ''ನೀನು ಅಸಾಹೇಲನಲ್ಲವೇ?'' ಎಂದು
ಕೇಳಿದನು.

''ಹೌದು'' ಎಂದು ಅಸಾಹೇಲನು ಹೇಳಿದನು.

[21]ಆಗ ಅಬ್ನೇರನು ಅವನಿಗೆ, ''ನೀನು ಬಲಕ್ಕಾಗಲೀ
ಎಡಕ್ಕಾಗಲೀ ತಿರುಗಿ ಒಬ್ಬ ಯುವಕನನ್ನು ಹಿಡಿದು
ಕೊಂಡು ಅವನ ಬಳಿಯಿರುವ ಆಯುಧವನ್ನು* ನಿನ
ಗಾಗಿ ತೆಗೆದುಕೊ'' ಎಂದು ಹೇಳಿದನು. ಆದರೆ
ಅಸಾಹೇಲನು ಅಬ್ನೇರನನ್ನು ಅಟ್ಟಿಸಿಕೊಂಡು ಹೋಗು
ವುದನ್ನು ನಿಲ್ಲಿಸಲಿಲ್ಲ.

[22]ಅಬ್ನೇರನು ಮತ್ತೆ ಅಸಾಹೇಲನಿಗೆ, ''ನನ್ನನ್ನು ಅಟ್ಟಿಸಿ
ಕೊಂಡು ಬರಬೇಡ; ಇಲ್ಲವಾದರೆ ನಾನು ನಿನ್ನನ್ನು
ಕೊಲ್ಲುತ್ತೇನೆ. ನಾನು ನಿನ್ನನ್ನು ಕೊಂದುಬಿಟ್ಟರೆ, ನಿನ್ನ
ಸೋದರನಾದ ಯೋವಾಬನ ಮುಖವನ್ನು ನಾನು ಮತ್ತೆ
ನೋಡಲಾಗುವುದಿಲ್ಲ'' ಎಂದು ಹೇಳಿದನು.

[23]ಆದರೂ ಅಸಾಹೇಲನು ಅಬ್ನೇರನನ್ನು ಅಟ್ಟಿಸಿ
ಕೊಂಡೇ ಹೋದನು. ಆದುದರಿಂದ ಅಬ್ನೇರನು ತನ್ನ

---

**ಬೂದಿಯನ್ನು** ಸೌಲ ಮತ್ತು ಯೋನಾತಾನರ ದೇಹಗಳನ್ನು ಸುಡ
ಲಾಗಿತ್ತು. ನೋಡಿ, 1 ಸಮು. 31:12.

**ಆಯುಧ** ರಣವೀರನು ಸ್ವರಕ್ಷಣೆಗಾಗಿ ತನ್ನಲ್ಲಿ ಇಟ್ಟುಕೊಂಡಿರುವ
ಲೋಹದ ಕವಚವುಳ್ಳ 'ಒರೆ.'

ಬರ್ಜಿಯ ಹಿಡಿಕೆಯನ್ನು ಹಿಡಿದುಕೊಂಡು ಅದನ್ನು
ಅಸಾಹೇಲನ ಹೊಟ್ಟೆಗೆ ತಿವಿದನು. ಆ ಬರ್ಜಿಯು
ಅಸಾಹೇಲನ ಹೊಟ್ಟೆಯೊಳಗೆ ಆಳವಾಗಿ ಚುಚ್ಚಿಕೊಂಡು
ಅವನ ಬೆನ್ನಿನಿಂದ ಹಾಯ್ದುಬಂದಿತು. ಅಸಾಹೇಲನು
ಅಲ್ಲಿಯೇ ಸತ್ತುಬಿದ್ದನು.

### ಅಬ್ನೇರನನ್ನು ಯೋವಾಬ್ ಮತ್ತು ಅಬೀಷೈ ಅಟ್ಟಿಸಿಕೊಂಡು ಹೋಗುವರು

ಅಸಾಹೇಲನ ದೇಹವು ನೆಲದ ಮೇಲೆ ಬಿದ್ದಿತ್ತು. ಜನರು
ಅವನ ಬಳಿಗೆ ಹೋಗಿ ಅಲ್ಲಿಯೇ ನಿಂತರು. [24]ಆದರೆ
ಯೋವಾಬ್ ಮತ್ತು ಅಬೀಷೈ* ಅಬ್ನೇರನನ್ನು ಅಟ್ಟಿಸಿ
ಕೊಂಡೇ ಹೋದರು. ಅವರು 'ಅಮ್ಮಾ' ಬೆಟ್ಟಕ್ಕೆ ಬರುವ
ಷ್ಟರಲ್ಲಿ ಸೂರ್ಯನು ಮುಳುಗಿದನು. (ಗಿಬ್ಯೋನಿನ
ಮರಳುಗಾಡಿನ ಮಾರ್ಗದಲ್ಲಿರುವ ಗೀಯದ ಎದುರಿಗಿ
ರುವುದೇ 'ಅಮ್ಮಾ' ಬೆಟ್ಟ.) [25]ಬೆನ್ಯಾಮೀನ್ ಕುಲದವ
ರೆಲ್ಲರು ಅಬ್ನೇರನ ಹತ್ತಿರಕ್ಕೆ ಬಂದರು. ಅವರೆಲ್ಲ ಬೆಟ್ಟದ
ಮೇಲೆ ಒಟ್ಟಾಗಿ ನಿಂತರು.

[26]ಅಬ್ನೇರನು ಯೋವಾಬನಿಗೆ, ''ನಾವು ಎಂದೆಂದೂ
ಯುದ್ಧಮಾಡಿ ಒಬ್ಬರನ್ನೊಬ್ಬರು ಕೊಲ್ಲಬೇಕೇ? ಇದು
ಹಗೆತನದಲ್ಲಿ ಅಂತ್ಯಗೊಳ್ಳುತ್ತದೆಂಬುದು ನಿಜವಾಗಿಯೂ
ನಿನಗೆ ತಿಳಿದಿದೆ. ತಮ್ಮ ಸೋದರರನ್ನೇ ಅಟ್ಟಿಸಿಕೊಂಡು
ಹೋಗುವುದನ್ನು ನಿಲ್ಲಿಸಲು ನಿನ್ನ ಜನರಿಗೆ ಹೇಳು''
ಎಂದು ಕೂಗಿಹೇಳಿದನು.

[27]ಆಗ ಯೋವಾಬನು, ''ನೀನು ಒಳ್ಳೆಯ ಮಾತನ್ನೇ
ಆಡಿರುವೆ. ನೀನು ಹೀಗೆ ಹೇಳದೆ ಇದ್ದಿದ್ದರೆ, ಯೆಹೋವ
ನಾಣೆಗೂ ಜನರು ನಾಳೆ ಮುಂಜಾನೆವರೆಗೂ ತಮ್ಮ
ಸೋದರರನ್ನೇ ಅಟ್ಟಿಸಿಕೊಂಡು ಹೋಗುತ್ತಿದ್ದರು''
ಎಂದು ಹೇಳಿದನು. [28]ಆಗ ಯೋವಾಬನು ತುತ್ತೂರಿ
ಯನ್ನು ಊದಿದನು. ಅವನ ಜನರು ಇಸ್ರೇಲರನ್ನು ಅಟ್ಟಿಸಿ
ಕೊಂಡು ಹೋಗುವುದನ್ನು ನಿಲ್ಲಿಸಿದರು. ಅವರು
ಇಸ್ರೇಲರ ವಿರುದ್ಧ ಹೋರಾಡಲು ಪ್ರಯತ್ನಿಸಲೇ ಇಲ್ಲ.
[29]ಅಬ್ನೇರನು ತನ್ನ ಜನರೊಂದಿಗೆ ರಾತ್ರಿಯೆಲ್ಲಾ ಅರಾಬಾ
ಕಣಿವೆಯಲ್ಲಿ ಪ್ರಯಾಣ ಮಾಡಿ, ಜೋರ್ಡನ್
ನದಿಯನ್ನು ದಾಟಿ ಮಹನಯಿಮಿಗೆ ಬಂದನು.

[30]ಅಬ್ನೇರನನ್ನು ಅಟ್ಟಿಸಿಕೊಂಡು ಹೋಗುವುದನ್ನು
ನಿಲ್ಲಿಸಿದ ನಂತರ ಯೋವಾಬನು ಹಿಂತಿರುಗಿ ಬಂದನು.
ಯೋವಾಬನು ತನ್ನ ಜನರನ್ನೆಲ್ಲ ಒಟ್ಟಾಗಿ ಸೇರಿಸಿದಾಗ,
ದಾವೀದನ ಭಟರಲ್ಲಿ ಹತ್ತೊಂಭತ್ತು ಮಂದಿ ಕಾಣಲಿಲ್ಲ.
ಅಸಾಹೇಲನು ಸಹ ಕಾಣಲಿಲ್ಲ. [31]ಆದರೆ ಅಬ್ನೇರನ
ಹಿಂಬಾಲಕರೂ ಬೆನ್ಯಾಮೀನ್ ಕುಟುಂಬದ ಗುಂಪಿ
ನವರೂ ಆದ ಮುನ್ನೂರೈವತ್ತು ಜನರನ್ನು ದಾವೀದನ
ಭಟರು ಕೊಂದಿದ್ದರು. [32]ದಾವೀದನ ಭಟರು
ಅಸಾಹೇಲನ ಶವವನ್ನು ಬೇತ್ಲೆಹೇಮಿಗೆ ತಂದು, ಅವನ
ತಂದೆಯ ಶ್ಮಶಾನಭೂಮಿಯಲ್ಲಿ ಸಮಾಧಿಮಾಡಿದರು.

ಯೋವಾಬನು ತನ್ನ ಜನರೊಂದಿಗೆ ರಾತ್ರಿಯೆಲ್ಲ
ಪ್ರಯಾಣಮಾಡಿ ಹೆಬ್ರೋನನ್ನು ತಲುಪಿದಾಗ
ಸೂರ್ಯೋದಯವಾಯಿತು.

### ಇಸ್ರೇಲರ ಮತ್ತು ಯೆಹೂದದವರ ಮಧ್ಯೆ ನಡೆದ ಯುದ್ಧ

3 ಸೌಲನ ವಂಶದವರ ಮತ್ತು ದಾವೀದನ ವಂಶ ದವರ
ಮಧ್ಯೆ ಬಹಳಕಾಲದವರೆಗೆ ಯುದ್ಧವು ನಡೆ ಯಿತು.
ದಾವೀದನು ಬಲಗೊಳ್ಳುತ್ತಲೇ ಇದ್ದನು. ಸೌಲನ
ವಂಶವು ದುರ್ಬಲಗೊಳ್ಳುತ್ತಲೇ ಇದ್ದಿತು.

### ದಾವೀದನಿಗೆ ಹೆಬ್ರೋನಿನಲ್ಲಿ ಹುಟ್ಟಿದ ಗಂಡು ಮಕ್ಕಳು

[2]ದಾವೀದನಿಗೆ ಹೆಬ್ರೋನಿನಲ್ಲಿ ಆರು ಮಂದಿ ಗಂಡು
ಮಕ್ಕಳು ಹುಟ್ಟಿದರು. ಅಮ್ನೋನನು ಮೊದಲನೆಯ ಮಗ.
ಇಜ್ರೇಲಿನವಳಾದ ಅಹೀನೋವಮಳು ಅಮ್ನೋನನ
ತಾಯಿ. [3]ಕಿಲಾಬನು ಎರಡನೆಯ ಮಗ. ಕರ್ಮೆಲ್ಯನಾದ
ನಾಬಾಲನ ವಿಧವೆಯಾದ ಅಬೀಗೈಲಳು ಕಿಲಾಬನ
ತಾಯಿ. ಅಬ್ಷಾಲೋಮನು ಮೂರನೆಯ ಮಗ.
ಗೆಷೂರಿನ ರಾಜ ತಲ್ಮೈನ ಮಗಳಾದ ಮಾಕಳು
ಅಬ್ಷಾಲೋಮನ ತಾಯಿ. [4]ಅದೋನೀಯನು ನಾಲ್ಕ
ನೆಯ ಮಗ. ಹಗ್ಗೀತಳು ಅದೋನೀಯನ ತಾಯಿ. ಶೆಫ
ಟ್ಯನು ಐದನೆಯ ಮಗ. ಅಬೀಟಲಳು ಶೆಫಟ್ಯನ ತಾಯಿ.
[5]ಇತ್ರಾಮನು ಆರನೆಯ ಮಗ. ದಾವೀದನ ಹೆಂಡತಿ
ಯಾದ ಎಗ್ಲಳು ಇತ್ರಾಮನ ತಾಯಿ. ದಾವೀದನಿಗೆ
ಹೆಬ್ರೋನಿನಲ್ಲಿ ಆರು ಮಂದಿ ಗಂಡು ಮಕ್ಕಳಿದ್ದರು.

### ಅಬ್ನೇರನು ದಾವೀದನ ಜೊತೆ ಸೇರಲು ತೀರ್ಮಾನಿಸಿದನು

[6]ಸೌಲನ ವಂಶದವರಿಗೂ ದಾವೀದನ ವಂಶದವರಿಗೂ
ಯುದ್ಧವು ನಡೆಯುತ್ತಿದ್ದಾಗ ಸೌಲನ ಸೈನ್ಯದಲ್ಲಿ
ಅಬ್ನೇರನು ತಾನೇ ಬಲಶಾಲಿಯಾದನು. [7]ಸೌಲನಿಗೆ
ರಿಚ್ಪಳೆಂಬ ಹೆಸರಿನ ದಾಸಿಯಿದ್ದಳು.* ಅವಳು ಅವನಿಗೆ
ಹೆಂಡತಿಯಂತೆ ಇದ್ದಳು. ರಿಚ್ಪಳು ಅಯಾಹನ ಮಗಳು.
ಈಷ್ಬೋಶೆತನು ಅಬ್ನೇರನಿಗೆ, ''ನನ್ನ ತಂದೆಯ ಸೇವಕಿ
ಯೊಡನೆ ಲೈಂಗಿಕ ಸಂಬಂಧವನ್ನು ಏಕೆ ಮಾಡು
ತ್ತಿರುವೆ?''ಎಂದು ಕೇಳಿದನು.

**ಯೋವಾಬ್ ಮತ್ತು ಅಬೀಷೈ** ಅಬ್ನೇರನಿಂದ ಕೊಲ್ಲಲ್ಪಟ್ಟ ಅಸಾಹೇಲನ ಸೋದರರು.

**ದಾಸಿ** ಅಥವಾ, ''ವೇಶ್ಯೆ'' ಗಂಡಸಿಗೆ ಗುಲಾಮಳಾಗಿ ಹೆಂಡತಿಯಂತೆ ಇರುವ ಹೆಣ್ಣು.

[8]ಈಷ್ಬೋಶೆತನ ಮಾತುಗಳಿಂದ ಅಬ್ನೇರನು ಬಹಳ
ಕೋಪಗೊಂಡನು. ಅಬ್ನೇರನು, ‘‘ನಾನು ಸೌಲನಿಗೂ
ಅವನ ವಂಶದವರಿಗೂ ನಂಬಿಗಸ್ತನಾಗಿದ್ದೆನು. ನಾನು
ನಿನ್ನನ್ನು ದಾವೀದನಿಗೆ ಒಪ್ಪಿಸಲಿಲ್ಲ ಹಾಗೂ ಅವನಿಂದ
ನೀನು ಸೋಲುವಂತೆ ಮಾಡಲಿಲ್ಲ. ನಾನು ಯೆಹೂದ
ಕ್ಕಾಗಿ ಕೆಲಸ ಮಾಡುವ ದ್ರೋಹಿಯಲ್ಲ. ಆದರೆ ಈಗ
ನಾನು ಇಂತಹ ಕೆಟ್ಟ ಕೆಲಸವನ್ನು ಮಾಡಿದೆನೆಂದು ಹೇಳು
ತ್ತಿರುವೆ. [9-10]ಯೆಹೋವನು ಹೇಳಿರುವ ಸಂಗತಿಗಳು ನಿಜ
ವಾಗಿಯೂ ಸಂಭವಿಸುತ್ತವೆ ಎಂದು ನಾನು ಪ್ರಮಾಣ
ಮಾಡುತ್ತೇನೆ. ಸೌಲನ ವಂಶದವರಿಂದ ರಾಜ್ಯಾಧಿಕಾರ
ವನ್ನು ಕಿತ್ತುಕೊಂಡು ದಾವೀದನಿಗೆ ಕೊಡುವುದಾಗಿ
ಯೆಹೋವನು ಹೇಳಿದ್ದಾನೆ. ಯೆಹೋವನು ಇಸ್ರೇಲಿಗೂ
ಯೆಹೂದಕ್ಕೂ ದಾವೀದನನ್ನು ರಾಜನನ್ನಾಗಿ ಮಾಡು
ತ್ತಾನೆ. ಅವನು ದಾನಿನಿಂದ ಬೇರ್ಷೆಬದವರೆಗೆ* ಆಳು
ತ್ತಾನೆ. ಈ ಸಂಗತಿಗಳು ನೆರವೇರುವುದಕ್ಕೆ ನಾನು ಸಹಾಯ
ಮಾಡದಿದ್ದರೆ ದೇವರು ನನಗೆ ಕೆಟ್ಟದ್ದನ್ನು ಮಾಡಲಿ’’
ಎಂದು ಹೇಳಿದನು.
[11]ಈಷ್ಬೋಶೆತನು ಅಬ್ನೇರನಿಗೆ ಏನನ್ನೂ ಹೇಳಲಿಲ್ಲ.
ಈಷ್ಬೋಶೆತನು ಅವನಿಗೆ ಬಹಳ ಭಯಪಟ್ಟನು.
[12]ಅಬ್ನೇರನು ದಾವೀದನ ಬಳಿಗೆ ಸಂದೇಶಕರನ್ನು
ಕಳುಹಿಸಿ, ‘‘ಈ ದೇಶವನ್ನು ಯಾರು ಆಳಬೇಕೆಂಬದು ನಿನ್ನ
ಅಭಿಪ್ರಾಯ? ನನ್ನೊಡನೆ ಒಂದು ಒಡಂಬಡಿಕೆಯನ್ನು
ಮಾಡಿಕೊಂಡರೆ, ಇಸ್ರೇಲಿನ ಜನರೆಲ್ಲರನ್ನು ನೀನು ಆಳು
ವಂತೆ ಮಾಡಲು ನಾನು ಸಹಾಯ ಮಾಡುತ್ತೇನೆ’’ ಎಂದು
ಹೇಳಿದನು. [13]ಆದಕ್ಕೆ ದಾವೀದನು, ‘‘ಒಳ್ಳೆಯದು! ನಾನು
ನಿನ್ನೊಡನೆ ಒಡಂಬಡಿಕೆ ಮಾಡಿಕೊಳ್ಳುತ್ತೇನೆ. ಆದರೆ
ನೀನು ನನಗಾಗಿ ಒಂದು ಕೆಲಸ ಮಾಡಬೇಕು. ಸೌಲನ
ಮಗಳಾದ ಮೀಕಲಳನ್ನು ನನ್ನ ಬಳಿಗೆ ಕರೆತರುವ ತನಕ
ನಾನು ನಿನ್ನನ್ನು ಸಂಧಿಸುವುದಿಲ್ಲ’’ ಎಂದು ಹೇಳಿದನು.

## ದಾವೀದನು ತನ್ನ ಹೆಂಡತಿಯಾದ ಮೀಕಲಳನ್ನು ಮರಳಿ ಪಡೆದನು

[14]ದಾವೀದನು ಸೌಲನ ಮಗನಾದ ಈಷ್ಬೋಶೆತನ
ಬಳಿಗೆ ಸಂದೇಶಕರನ್ನು ಕಳುಹಿಸಿ, ‘‘ನನ್ನ ಹೆಂಡತಿಯಾದ
ಮೀಕಲಳನ್ನು ನನ್ನ ಬಳಿಗೆ ಕಳುಹಿಸು. ಅವಳನ್ನು ನನಗೆ
ಕೊಡುವುದಾಗಿ ಮಾತುಕತೆಯಾಗಿತ್ತು. ಅವಳನ್ನು ಪಡೆ
ಯಲು ನಾನು ನೂರು ಜನ ಫಿಲಿಷ್ಟಿಯರನ್ನು
ಕೊಂದಿದ್ದೇನೆ* ’’ಎಂದು ಹೇಳಿದನು.
[15]ಆಗ ಈಷ್ಬೋಶೆತನು, ಲಯಿಷನ ಮಗನಾದ
ಪಲ್ಟೀಯೇಲನ ಬಳಿಯಿಂದ ಮೀಕಲಳನ್ನು ಕರೆತರು
ವಂತೆ ತನ್ನ ಜನರಿಗೆ ಹೇಳಿದನು. [16]ಮೀಕಲಳ ಗಂಡನಾದ
ಪಲ್ಟೀಯೇಲನೂ ಅವಳ ಜೊತೆಗೆ ಬಂದನು. ಮೀಕಲಳ
ಜೊತೆಯಲ್ಲಿ ಬಹುರೀಮಿಗೆ ಬರುವಾಗ ಪಲ್ಟೀಯೇಲನು
ಅಳುತ್ತಿದ್ದನು. ಆದರೆ ಅಬ್ನೇರನು, ‘‘ನಿನ್ನ ಮನೆಗೆ ಹಿಂದಿ
ರುಗಿ ಹೋಗು’’ ಎಂದು ಪಲ್ಟೀಯೇಲನಿಗೆ ಹೇಳಿದನು.
ಆದ್ದರಿಂದ ಪಲ್ಟೀಯೇಲನು ಮನೆಗೆ ಹಿಂದಿರುಗಿದನು.

## ಅಬ್ನೇರನು ದಾವೀದನಿಗೆ ಸಹಾಯ ಮಾಡುವುದಾಗಿ ವಾಗ್ದಾನ ಮಾಡಿದನು

[17]ಅಬ್ನೇರನು ಇಸ್ರೇಲಿನ ನಾಯಕರಿಗೆ ಸಂದೇಶ
ವೊಂದನ್ನು ಕಳುಹಿಸಿ, ‘‘ದಾವೀದನನ್ನು ನಿಮ್ಮ ರಾಜನ
ನ್ನಾಗಿ ಮಾಡಲು ನೀವು ಕಾಯುತ್ತಿದ್ದೀರಿ. [18]ಅದನ್ನು
ಈಗಲೇ ಮಾಡಿರಿ! ಯೆಹೋವನು ದಾವೀದನ ಬಗ್ಗೆ
ಮಾತಾಡುತ್ತಾ, ‘ನನ್ನ ಜನರಾದ ಇಸ್ರೇಲರನ್ನು ಫಿಲಿಷ್ಟಿಯ
ರಿಂದಲೂ ಬೇರೆಲ್ಲಾ ಶತ್ರುಗಳಿಂದಲೂ ನನ್ನ ಸೇವಕನಾದ
ದಾವೀದನ ಮೂಲಕ ಸಂರಕ್ಷಿಸುತ್ತೇನೆ’’ ಎಂದು
ಹೇಳಿದ್ದಾನೆ.
[19]ಅಬ್ನೇರನು ಹೆಬ್ರೋನಿನಲ್ಲಿ ದಾವೀದನಿಗೆ ಈ
ಮಾತುಗಳನ್ನು ಹೇಳಿದನು. ಬೆನ್ಯಾಮೀನ್ ವಂಶದ
ವರಿಗೂ ಅವನು ಈ ಮಾತುಗಳನ್ನು ಹೇಳಿದನು.
ಅಬ್ನೇರನ ಮಾತುಗಳು ಬೆನ್ಯಾಮೀನ್ ವಂಶದವರಿಗೆ
ಮತ್ತು ಇಸ್ರೇಲಿನ ಜನರಿಗೆಲ್ಲರಿಗೂ ಒಳ್ಳೆಯ ಮಾತುಗ
ಳೆಂದು ಕಂಡುಬಂದವು.
[20]ನಂತರ ಅಬ್ನೇರನು ಹೆಬ್ರೋನಿನಲ್ಲಿದ್ದ ದಾವೀದನ
ಬಳಿಗೆ ಬಂದನು. ಅಬ್ನೇರನು ಇಪ್ಪತ್ತು ಜನರನ್ನು ತನ್ನ
ಸಂಗಡ ಕರೆದುತಂದನು. ಅಬ್ನೇರನಿಗೂ ಅವನ
ಸಂಗಡಿಗರಿಗೂ ದಾವೀದನು ಔತಣಕೂಟವನ್ನು
ಏರ್ಪಡಿಸಿದ್ದನು.
[21]ಅಬ್ನೇರನು ದಾವೀದನಿಗೆ, ‘‘ರಾಜನಾದ ನನ್ನ ಒಡೆ
ಯನೇ, ನಾನು ಹೋಗಿ ಎಲ್ಲ ಇಸ್ರೇಲರನ್ನೂ ನಿನ್ನ ಬಳಿಗೆ
ಕರೆತರುತ್ತೇನೆ; ನಂತರ ಅವರು ನಿನ್ನೊಡನೆ ಒಂದು
ಒಪ್ಪಂದವನ್ನು ಮಾಡಿಕೊಳ್ಳುತ್ತಾರೆ. ನೀನು ನಿನ್ನ ಇಷ್ಟ
ದಂತೆ ಸಮಸ್ತ ಇಸ್ರೇಲನ್ನು ಆಳಬಹುದು’’ ಎಂದು
ಹೇಳಿದನು. ದಾವೀದನು ಅಬ್ನೇರನನ್ನು ಕಳುಹಿಸಿದನು.
ಅಬ್ನೇರನು ಸಮಾಧಾನದಿಂದ ಹೋದನು.

## ಅಬ್ನೇರನ ಮರಣ

[22]ಯೋವಾಬನೂ ದಾವೀದನ ಅಧಿಕಾರಿಗಳೂ
ಯುದ್ಧರಂಗದಿಂದ ಹಿಂದಿರುಗಿದರು. ಶತ್ರುಗಳಿಂದ ವಶ
ಪಡಿಸಿಕೊಂಡ ಅನೇಕ ಬೆಲೆಬಾಳುವ ವಸ್ತುಗಳು ಅವರ

---

**ದಾನಿನಿಂದ ಬೇರ್ಷೆಬದವರೆಗೆ** ಇಸ್ರೇಲಿನ ಜನರನ್ನೆಲ್ಲ ಎಂದರ್ಥ. ದಾನ್ ಪಟ್ಟಣವು ಉತ್ತರದ ಕೊನೆಯಲ್ಲಿದ್ದರೆ ಬೇರ್ಷೆಬವು ದಕ್ಷಿಣಕ್ಕಿದೆ.

**ನಾನು … ಕೊಂದಿದ್ದೇನೆ** ಅಕ್ಷರಶಃ, ‘‘ನಾನು ಅವಳಿಗೆ ನೂರು ಜನ ಫಿಲಿಷ್ಟಿಯರ ಮುಂದೊಗಲುಗಳನ್ನು ಸಲ್ಲಿಸಿದ್ದೇನೆ’’ ಎಂದು

ಹತ್ತಿರವಿದ್ದವು. ದಾವೀದನು ಅಬ್ನೇರನನ್ನು ಆಗಲೇ ಸಮಾಧಾನದಿಂದ ಕಳುಹಿಸಿಕೊಟ್ಟಿದ್ದರಿಂದ ಯೋವಾಬನು ಬಂದಾಗ ಅವನು ಹೆಬ್ರೋನಿನಲ್ಲಿರಲಿಲ್ಲ.
23 ಯೋವಾಬನು ತನ್ನ ಎಲ್ಲ ಸೈನ್ಯದೊಂದಿಗೆ ಹೆಬ್ರೋನಿಗೆ ಬಂದನು. ಸೈನಿಕರು ಯೋವಾಬನಿಗೆ, ‘‘ನೇರನ ಮಗನಾದ ಅಬ್ನೇರನು ರಾಜನಾದ ದಾವೀದನ ಹತ್ತಿರಕ್ಕೆ ಬಂದಿದ್ದನು. ದಾವೀದನು ಅಬ್ನೇರನನ್ನು ಸಮಾಧಾನದಿಂದ ಕಳುಹಿಸಿಕೊಟ್ಟನು’’ ಎಂದು ಹೇಳಿದರು.

24 ಯೋವಾಬನು ರಾಜನ ಬಳಿಗೆ ಬಂದು, ‘‘ನೀನು ಮಾಡಿದ್ದೇನು? ಅಬ್ನೇರನು ನಿನ್ನ ಬಳಿಗೆ ಬಂದರೂ ಅವನನ್ನು ದಂಡಿಸದೆ ಯಾಕೆ ಕಳುಹಿಸಿಬಿಟ್ಟೆ?
25 ಅಬ್ನೇರನು ನೇರನ ಮಗನೆಂಬುದು ನಿನಗೆ ತಿಳಿದಿದೆ ಅವನು ನಿನ್ನನ್ನು ವಂಚಿಸಲು ಬಂದಿದ್ದನು. ನೀನು ಏನೇನು ಮಾಡುತ್ತಿರುವೆಯೆನ್ನುವುದನ್ನು ತಿಳಿದುಕೊಳ್ಳಲು ಅವನು ಬಂದಿದ್ದನು’’ ಎಂದು ಹೇಳಿದನು.

26 ಯೋವಾಬನು ದಾವೀದನನ್ನು ಬಿಟ್ಟು, ಅಬ್ನೇರನನ್ನು ಸಿರಾ ಬಾವಿಯ ಬಳಿಯಿಂದ ಕರೆತರಲು ದೂತರನ್ನು ಕಳುಹಿಸಿದನು. ಅಬ್ನೇರನನ್ನು ದೂತರು ಹಿಂದಕ್ಕೆ ಕರೆತಂದರು, ಈ ಸಂಗತಿಯು ದಾವೀದನಿಗೆ ತಿಳಿದಿರಲಿಲ್ಲ.
27 ಅಬ್ನೇರನು ಹೆಬ್ರೋನಿಗೆ ಬಂದಾಗ, ಯೋವಾಬನು ಅವನ ಜೊತೆಯಲ್ಲಿ ಪ್ರತ್ಯೇಕವಾಗಿ ಮಾತನಾಡುವುದಕ್ಕಾಗಿ ಊರುಬಾಗಿಲಿನ ಒಂದು ಪಕ್ಕಕ್ಕೆ ಕರೆದುಕೊಂಡು ಹೋದನು. ಆದರೆ ಯೋವಾಬನು ಅಬ್ನೇರನ ಹೊಟ್ಟೆಗೆ ತಿವಿದಿದ್ದರಿಂದ ಅವನು ಸತ್ತನು. ಹಿಂದೆ, ಅಬ್ನೇರನು ಯೋವಾಬನ ಸೋದರನಾದ ಅಸಾಹೇಲನನ್ನು ಕೊಂದಿದ್ದನು. ಆದ್ದರಿಂದ ಯೋವಾಬನು ಅಬ್ನೇರನನ್ನು ಕೊಂದನು.

### ದಾವೀದನು ಅಬ್ನೇರನಿಗಾಗಿ ಗೋಳಾಡಿದನು

28 ತರುವಾಯ ದಾವೀದನಿಗೆ ಸುದ್ದಿಯು ತಿಳಿಯಿತು. ದಾವೀದನು, ‘‘ನನ್ನ ರಾಜ್ಯವಾಗಲೀ ನಾನಾಗಲೀ ನೇರನ ಮಗನಾದ ಅಬ್ನೇರನ ಸಾವಿಗೆ ಕಾರಣರಲ್ಲ. ಯೆಹೋವನಿಗೆ ಇದು ತಿಳಿದಿದೆ.
29 ಯೋವಾಬನು ಮತ್ತು ಅವನ ವಂಶದವರು ಇದಕ್ಕೆ ಜವಾಬ್ದಾರರು. ಅವನ ವಂಶದವರನ್ನು ಇದಕ್ಕಾಗಿ ದೂಷಿಸಬೇಕು. ಯೋವಾಬನ ವಂಶಕ್ಕೆ ಅನೇಕ ಕಷ್ಟಗಳು ಬರಲಿ. ಅವನ ವಂಶದವರಲ್ಲಿ ಕುಷ್ಠರೋಗಿಗಳು, ಊರುಗೋಲು ಬಳಸುವವರು, ಕತ್ತಿಯಿಂದ ಸಾಯುವವರು, ಭಿಕ್ಷೆ ಬೇಡುವವರು ಇದ್ದೇ ಇರಲಿ’’ ಎಂದು ಹೇಳಿದನು.

30 ಅಸಾಹೇಲನನ್ನು ಗಿಬ್ಯೋನ್ ಯುದ್ಧದಲ್ಲಿ ಅಬ್ನೇರನು ಕೊಂದುಹಾಕಿದನು. ಆದ್ದರಿಂದ ಅಸಾಹೇಲನ ಸಹೋದರರಾದ ಯೋವಾಬ ಮತ್ತು ಅಬೀಷೈ ಅಬ್ನೇರನನ್ನು ಕೊಂದರು.

31-32 ದಾವೀದನು ಯೋವಾಬನಿಗೆ ಮತ್ತು ಅವನ ಜೊತೆಯಲ್ಲಿದ್ದ ಜನರಿಗೆಲ್ಲ, ‘‘ನಿಮ್ಮ ಬಟ್ಟೆಗಳನ್ನು ಹರಿದುಕೊಂಡು ಮತ್ತು ಶೋಕಸೂಚಕ ವಸ್ತ್ರಗಳನ್ನು ಧರಿಸಿಕೊಂಡು ಅಬ್ನೇರನಿಗಾಗಿ ಶೋಕಿಸಿ’’ ಎಂದು ಹೇಳಿದನು. ಅವರು ಅಬ್ನೇರನನ್ನು ಹೆಬ್ರೋನಿನಲ್ಲಿ ಸಮಾಧಿ ಮಾಡಿದರು. ರಾಜನಾದ ದಾವೀದನೂ ಶವ ಸಂಸ್ಕಾರಕ್ಕೆ ಹೋದನು. ಅಬ್ನೇರನ ಸಮಾಧಿಯ ಹತ್ತಿರ ರಾಜನಾದ ದಾವೀದನೂ ಇತರ ಜನರೂ ಗೋಳಾಡಿದರು.

33 ರಾಜನಾದ ದಾವೀದನು ಅಬ್ನೇರನಿಗಾಗಿ ಈ ಶೋಕ ಗೀತೆಯನ್ನು ಹಾಡಿದನು:

‘‘ಅಬ್ನೇರನು ಮೂರ್ಖ ಅಪರಾಧಿಯಂತೆ
ಸತ್ತನೇ?
34 ಅಬ್ನೇರನೇ, ನಿನ್ನ ಕೈಗಳನ್ನು ಹಗ್ಗದಿಂದ ಬಿಗಿದಿರಲಿಲ್ಲ. ನಿನ್ನ ಪಾದಗಳಿಗೆ ಸಂಕೋಲೆಯನ್ನು ತೊಡಿಸಿರಲಿಲ್ಲ. ದುಷ್ಟಜನರೆದುರು ನೀನು ಬಿದ್ದೆಯಲ್ಲ, ನೀನು ಬಿದ್ದು ಸತ್ತೆಯಲ್ಲ.’’

ಆಗ ಜನರೆಲ್ಲರೂ ಅಬ್ನೇರನಿಗಾಗಿ ಮತ್ತೆ ಗೋಳಾಡಿದರು.
35 ಅಂದು ಹೊತ್ತು ಇಳಿಯುವ ಮೊದಲೇ ಜನರು ದಾವೀದನಿಗೆ ಊಟ ಮಾಡುವಂತೆ ಒತ್ತಾಯಿಸಿದರು. ಆದರೆ ದಾವೀದನು, ‘‘ಸೂರ್ಯನು ಮುಳುಗುವುದಕ್ಕೆ ಮುಂಚಿತವಾಗಿ ನಾನು ರೊಟ್ಟಿಯನ್ನಾಗಲೀ ಇತರ ಆಹಾರವನ್ನಾಗಲೀ ತಿಂದರೆ, ದೇವರು ನನ್ನನ್ನು ದಂಡಿಸಲಿ ಅಥವಾ ನನಗೆ ಕೇಡು ಬರಮಾಡಲಿ’’ ಎಂದು ಹರಕೆ ಮಾಡಿಕೊಂಡನು.
36 ಇದನ್ನು ಕೇಳಿದ ಜನರೆಲ್ಲರೂ ರಾಜನಾದ ದಾವೀದನ ಈ ಕಾರ್ಯವನ್ನು ಮೆಚ್ಚಿಕೊಂಡರು.
37 ನೇರನ ಮಗನಾದ ಅಬ್ನೇರನನ್ನು ಕೊಲ್ಲಲು ರಾಜನಾದ ದಾವೀದನು ಆಜ್ಞಾಪಿಸಿರಲಿಲ್ಲ ವೆಂದು ಯೆಹೂದ್ಯರು ಮತ್ತು ಇಸ್ರೇಲಿನ ಜನರೆಲ್ಲರೂ ಅಂದು ಅರ್ಥ ಮಾಡಿಕೊಂಡರು.

38 ರಾಜನಾದ ದಾವೀದನು ತನ್ನ ಸೇವಕರಿಗೆ, ‘‘ಇಸ್ರೇಲಿನಲ್ಲಿ ಇಂದು ಮಹಾಪುರುಷನಾದ ನಾಯಕನೊಬ್ಬನು ಸತ್ತನೆಂಬುದು ನಿಮಗೆಲ್ಲ ತಿಳಿದಿದೆ.
39 ನಾನು ರಾಜನಾಗಿದ್ದರೂ ಏನೂ ಮಾಡಲಾರದ ಸ್ಥಿತಿಯಲ್ಲಿದ್ದೇನೆ. ಚೆರೂಯಳ ಗಂಡು ಮಕ್ಕಳಾದ ಇವರು ನನಗೆ ಬಹಳ ಕೇಡನ್ನು ಮಾಡಿದರು. ಯೆಹೋವನು ಈ ಜನರಿಗೆ ತಕ್ಕ ದಂಡನೆಯನ್ನು ನೀಡಲಿ’’ ಎಂದು ಹೇಳಿದನು.

### ಸೌಲನ ಸೈನ್ಯಾಧಿಪತಿಗಳಾಗಿದ್ದ ಬಾಣ ಮತ್ತು ರೇಕಾಬ್

4 ಹೆಬ್ರೋನಿನಲ್ಲಿ ಅಬ್ನೇರನು ಸತ್ತನೆಂಬುದು ಸೌಲನ ಮಗನಾದ ಈಷ್ಬೋಶೆತನಿಗೆ ತಿಳಿಯಿತು. ಈಷ್ಬೋಶೆತನು ಮತ್ತು ಅವನ ಜನರು ಬಹಳ ಭಯಗೊಂಡರು.

[2]ಬಾಣ ಮತ್ತು ರೇಕಾಬ್ ಎಂಬವರು ಸೌಲನ ಮಗನ
ಸೈನ್ಯದಲ್ಲಿ, ಸೇನಾಧಿಪತಿಗಳಾಗಿದ್ದರು. ಅವರಿಬ್ಬರೂ
ಬೇರೋತಿನವನಾದ ರಿಮ್ಮೋನನ ಮಕ್ಕಳು. ಅವರು
ಬೆನ್ಯಾಮೀನ್ ಕುಲದವರಾಗಿದ್ದರು. ಬೇರೋತ್
ಪಟ್ಟಣವು ಬೆನ್ಯಾಮೀನ್‌ಕುಲದವರಿಗೆ ಸೇರಿತ್ತು.
[3]ಬೇರೋತಿನ ಜನರು ಗಿತ್ತಯಿಮಿಗೆ ಓಡಿಹೋದರು.
ಅವರು ಇವತ್ತಿನವರೆಗೂ ಅಲ್ಲಿ ನೆಲೆಸಿದ್ದಾರೆ.

### ಯೋನಾತಾನನ ಮಗನಾದ ಮೆಫೀಬೋಶೆತನು

[4]ಸೌಲನ ಮಗನಾದ ಯೋನಾತಾನನಿಗೆ ಮೆಫೀ-
ಬೋಶೆತನೆಂಬ ಒಬ್ಬ ಮಗನಿದ್ದನು. ಸೌಲನು ಮತ್ತು
ಯೋನಾತಾನನು ಇಸ್ರೇಲಿನಲ್ಲಿ ಸತ್ತರೆಂಬ ವರ್ತ
ಮಾನವು ಬಂದಾಗ ಯೋನಾತಾನನ ಮಗನಿಗೆ ಐದು
ವರ್ಷವಾಗಿತ್ತು. ಅವನ ದಾದಿಯು ಅವನನ್ನು ಎತ್ತಿ
ಕೊಂಡು ಓಡತೊಡಗಿದಳು. ಆ ದಾದಿಯು ಅವಸರದಿಂದ
ಓಡಿಹೋಗುತ್ತಿದ್ದಾಗ, ಯೋನಾತಾನನ ಮಗನು ಅವಳ
ತೋಳುಗಳಿಂದ ಕೆಳಕ್ಕೆ ಬಿದ್ದನು. ಹೀಗೆ ಕೆಳಗೆ ಬಿದ್ದ
ಯೋನಾತಾನನ ಮಗನು ಕುಂಟನಾದನು. ಈ ಮಗನ
ಹೆಸರೇ ಮೆಫೀಬೋಶೆತ.

### ಈಷ್ಬೋಶೆತನನ್ನು ಬಾಣ ಮತ್ತು ರೇಕಾಬರು ಕೊಂದುಹಾಕುವರು

[5]ಬೇರೋತಿನ ರಿಮ್ಮೋನನ ಮಕ್ಕಳಾದ ಬಾಣನು
ಮತ್ತು ರೇಕಾಬನು ಈಷ್ಬೋಶೆತನ ಮನೆಗೆ ಮಧ್ಯಾಹ್ನದಲ್ಲಿ
ಹೋದರು. ಈಷ್ಬೋಶೆತನು ಬಿಸಿಲಿನ ತಾಪದಿಂದ
ವಿಶ್ರಾಂತಿ ಪಡೆಯುತ್ತಿದ್ದನು. [6-7]ಬಾಣನು ಮತ್ತು
ರೇಕಾಬನು ಗೋಧಿಯನ್ನು ತೆಗೆದುಕೊಳ್ಳುವವರಂತೆ
ಮನೆಯ ಮಧ್ಯಭಾಗಕ್ಕೆ ಬಂದರು. ಈಷ್ಬೋಶೆತನು ಮಲ
ಗುವ ಕೋಣೆಯಲ್ಲಿ ಹಾಸಿಗೆಯ ಮೇಲೆ ಮಲಗಿದ್ದನು.
ರೇಕಾಬನು ಮತ್ತು ಬಾಣನು ಈಷ್ಬೋಶೆತನನ್ನು ಇರಿದು
ಕೊಂದರು. ನಂತರ ಅವರು ಅವನ ತಲೆಯನ್ನು ಕತ್ತರಿಸಿ
ಅದನ್ನು ತಮ್ಮೊಂದಿಗೆ ತೆಗೆದುಕೊಂಡು ಹೋದರು.
ಅವರು ಜೋರ್ಡನ್ ಕಣಿವೆಯಲ್ಲಿ ರಾತ್ರಿಯೆಲ್ಲಾ
ಪ್ರಯಾಣಮಾಡಿ [8]ಹೆಬ್ರೋನಿಗೆ ಬಂದು ಈಷ್ಬೋಶೆತನ
ತಲೆಯನ್ನು ದಾವೀದನಿಗೆ ಕೊಟ್ಟರು.

ರೇಕಾಬನು ಮತ್ತು ಬಾಣನು ರಾಜನಾದ ದಾವೀದ
ನಿಗೆ, ‘‘ಸೌಲನ ಮಗನೂ ನಿನ್ನ ಶತ್ರುವೂ ಆದ
ಈಷ್ಬೋಶೆತನ ತಲೆಯು ಇಲ್ಲಿದೆ. ಅವನು ನಿನ್ನನ್ನು
ಕೊಲ್ಲಲು ಪ್ರಯತ್ನಿಸಿದನು. ನಿನಗಾಗಿ ಯೆಹೋವನು ಈ
ದಿನ ಸೌಲನನ್ನೂ ಅವನ ಕುಲವನ್ನೂ ದಂಡಿಸಿದನು’’
ಎಂದು ಹೇಳಿದರು.

[9]ದಾವೀದನು ರೇಕಾಬನಿಗೂ ಅವನ ಸೋದರನಾದ
ಬಾಣನಿಗೂ ‘‘ಯೆಹೋವನಾಣೆಯಾಗಿಯೂ ಆತನು
ಎಲ್ಲಾ ಕೇಡುಗಳಿಂದ ನನ್ನನ್ನು ರಕ್ಷಿಸಿದನು. [10]ಆದರೆ
ಒಮ್ಮೆ ಒಬ್ಬ ವ್ಯಕ್ತಿಯು ತಾನು ಶುಭಸುದ್ದಿಯನ್ನು ನನಗೆ
ತರುತ್ತಿದ್ದೇನೆಂದು ಯೋಚಿಸಿದನು. ಅವನು, ‘ನೋಡು,
ಸೌಲನು ಸತ್ತನು’ ಎಂದು ನನಗೆ ಹೇಳಿದನು. ಈ
ಸುದ್ದಿಯನ್ನು ನನಗೆ ತಿಳಿಸಿದ್ದರಿಂದ ನಾನು ಅವನಿಗೆ
ಕೊಡುಗೆಗಳನ್ನು ಕೊಡಬಹುದೆಂದು ಅವನು ಭಾವಿಸಿ
ದನು. ಅದರೆ ನಾನು ಅವನನ್ನು ಚಿಕ್ಲಗಿನಲ್ಲಿ ಕೊಂದೆನು.
[11]‘‘ದುಷ್ಟರಾದ ನೀವು ಇಂದು ಒಬ್ಬ ನೀತಿವಂತನನ್ನು
ಅವನ ಸ್ವಂತ ಮನೆಯಲ್ಲಿ ಅವನ ಸ್ವಂತ ಹಾಸಿಗೆಯ
ಮೇಲೆಯೇ ಕೊಂದಿರುವುದರಿಂದ ನಿಮ್ಮನ್ನೂ ನಾನು
ಕೊಂದು ನಿರ್ಮೂಲ ಮಾಡಬೇಕು’’ ಎಂದನು.

[12]ದಾವೀದನು, ರೇಕಾಬನನ್ನು ಮತ್ತು ಬಾಣನನ್ನು
ಕೊಲ್ಲಲು ಯುವಕರಿಗೆ ಆಜ್ಞಾಪಿಸಿದನು. ಆಗ ಆ
ಯುವಕರು ರೇಕಾಬನ ಮತ್ತು ಬಾಣನ ಕೈಕಾಲುಗಳನ್ನು
ಕತ್ತರಿಸಿಹಾಕಿ, ಹೆಬ್ರೋನಿನ ಕೊಳದ ಬಳಿಯಲ್ಲಿ ಅವರ
ದೇಹಗಳನ್ನು ನೇತುಹಾಕಿದರು. ನಂತರ ಅವರು
ಈಷ್ಬೋಶೆತನ ತಲೆಯನ್ನು ತೆಗೆದುಕೊಂಡು ಹೋಗಿ,
ಹೆಬ್ರೋನಿನಲ್ಲಿ ಅಬ್ನೇರನನ್ನು ಸಮಾಧಿಮಾಡಿದ
ಸ್ಥಳದಲ್ಲೇ ಸಮಾಧಿಮಾಡಿದರು.

### ಇಸ್ರೇಲರು ದಾವೀದನನ್ನು ರಾಜನನ್ನಾಗಿ ಮಾಡುವರು

5 ಆಗ ಇಸ್ರೇಲಿನ ಕುಲಗಳವರೆಲ್ಲಾ ಹೆಬ್ರೋನಿನಲ್ಲಿದ್ದ
ದಾವೀದನ ಬಳಿಗೆ ಬಂದು, ‘‘ನಾವೆಲ್ಲಾ ಒಂದೇ
ಕುಲದವರಾಗಿದ್ದೇವೆ.* [2]ಹಿಂದಿನ ದಿನಗಳಲ್ಲಿ, ಸೌಲನು
ರಾಜನಾಗಿದ್ದಾಗಲೂ ನಮ್ಮನ್ನು ಯುದ್ಧದಲ್ಲಿ ಮುನ್ನಡೆಸಿ
ದವನು ನೀನೇ. ಯೆಹೋವನು ನಿನ್ನನ್ನು ಕುರಿತು, ‘ನೀನು
ನನ್ನ ಜನರಾದ ಇಸ್ರೇಲರ ನಾಯಕನೂ ಪಾಲಕನೂ
ಆಗಿರುವೆ’ ಎಂದು ಹೇಳಿದ್ದಾನೆ’’ ಎಂದರು.

[3]ರಾಜನಾದ ದಾವೀದನಿದ್ದ ಹೆಬ್ರೋನಿಗೆ ಇಸ್ರೇಲಿನ
ಎಲ್ಲ ನಾಯಕರೂ ಬಂದರು. ಹೆಬ್ರೋನಿನಲ್ಲಿ ರಾಜನಾದ
ದಾವೀದನು ಯೆಹೋವನ ಸನ್ನಿಧಿಯಲ್ಲಿ ಈ ನಾಯಕ
ರೊಂದಿಗೆ ಒಂದು ಒಪ್ಪಂದವನ್ನು ಮಾಡಿಕೊಂಡನು. ಆಗ
ನಾಯಕರು ದಾವೀದನನ್ನು ಇಸ್ರೇಲಿನ ರಾಜನನ್ನಾಗಿ
ಅಭಿಷೇಕಿಸಿದರು.

[4]ದಾವೀದನು ಆಳುವುದಕ್ಕೆ ಪ್ರಾರಂಭಿಸಿದಾಗ ಅವನಿಗೆ
ಮೂವತ್ತು ವರ್ಷ ವಯಸ್ಸಾಗಿತ್ತು. ಅವನು ನಲವತ್ತು
ವರ್ಷಗಳ ಕಾಲ ಆಳಿದನು. [5]ಅವನು ಏಳು ವರ್ಷ ಆರು
ತಿಂಗಳ ಕಾಲ ಹೆಬ್ರೋನಿನಲ್ಲಿದ್ದು ಯೆಹೂದ್ಯರನ್ನು ಆಳಿ
ದನು. ಅವನು ಮೂವತ್ತ ಮೂರು ವರ್ಷ ಜೆರುಸಲೇಮಿ
ನಲ್ಲಿದ್ದು ಸಮಸ್ತ ಇಸ್ರೇಲನ್ನು ಮತ್ತು ಯೆಹೂದವನ್ನು
ಆಳಿದನು.

**ಒಂದೇ ಕುಲ** ಅಕ್ಷರಶಃ, ‘‘ನಿನ್ನ ರಕ್ತ ಮತ್ತು ಮಾಂಸ.’’

### ದಾವೀದನು ಜೆರುಸಲೇಮ್ ಪಟ್ಟಣವನ್ನು ಗೆಲ್ಲುವನು

6ದಾವೀದನು ಯೆಬೂಸಿಯರಿಗೆ ವಿರುದ್ಧವಾಗಿ
ಜೆರುಸಲೇಮಿಗೆ ತನ್ನ ಜನರೊಂದಿಗೆ ಹೋದನು.
(ಯೆಬೂಸಿಯರು ಆ ದೇಶದ ಮೂಲನಿವಾಸಿಗಳು.)
ಯೆಬೂಸಿಯರು ದಾವೀದನಿಗೆ, ''ನೀನು ನಮ್ಮ ನಗರ
ದೊಳಕ್ಕೆ ಬರಲಾಗದು.* ಕುರುಡರು ಮತ್ತು ಕುಂಟರು
ಸಹ ನಿನ್ನನ್ನು ತಡೆಯಬಲ್ಲರು'' ಎಂದು ಹೇಳಿದರು.
(ದಾವೀದನು ಅವರ ನಗರದೊಳಕ್ಕೆ ಪ್ರವೇಶಿಸಲು
ಸಮರ್ಥನಲ್ಲವೆಂದು ಅವರು ಈ ರೀತಿ ಹೇಳಿದರು.
7ಆದರೆ ದಾವೀದನು ಚೀಯೋನ್ ಕೋಟೆಯನ್ನು ವಶ
ಪಡಿಸಿಕೊಂಡನು. ಈ ಕೋಟೆಗೆ ದಾವೀದನಗರವೆಂದು*
ಹೆಸರಾಯಿತು.)
8ದಾವೀದನು ತನ್ನ ಜನರಿಗೆ ಅಂದು. ''ನೀವು
ಯೆಬೂಸಿಯರನ್ನು ಸೋಲಿಸಬೇಕೆಂದಿದ್ದರೆ ಜಲ
ಮಾರ್ಗದ ಮೂಲಕ* ಹೋಗಿ ಶತ್ರುಗಳಾದ 'ಕುಂಟರು
ಮತ್ತು ಕುರುಡರನ್ನು ಎದುರಿಸಿ'' ಎಂದು ಹೇಳಿದನು.

ಆದುದರಿಂದಲೇ ''ಕುರುಡರು ಮತ್ತು ಕುಂಟರು ಮನೆ
ಯೊಳಕ್ಕೆ* ಬರಲಾಗದು''ಎಂಬ ನಾಣ್ಣುಡಿ
ಉಂಟಾಯಿತು.

9ದಾವೀದನು ಕೋಟೆಯಲ್ಲಿ ನೆಲೆಸಿದ್ದನು. ಅವನು ಆ
ಕೋಟೆಗೆ ''ದಾವೀದನ ನಗರ'' ವೆಂದು ಕರೆದನು.
ದಾವೀದನು ಮಿಲ್ಲೋವನ್ನು* ಕಟ್ಟಿಸಿದನು. ಅವನು
ನಗರದಲ್ಲಿ ಅನೇಕ ಕಟ್ಟಡಗಳನ್ನು ಕಟ್ಟಿಸಿದನು. 10ಸರ್ವ
ಶಕ್ತನಾದ ಯೆಹೋವನು ದಾವೀದನೊಂದಿಗೆ ಇದ್ದುದ
ರಿಂದ ಅವನು ಬಲಶಾಲಿಯಾಗುತ್ತಲೇ ಇದ್ದನು.
11ತೂರಿನ ರಾಜನಾದ ಹೀರಾಮನು ದಾವೀದನ ಬಳಿಗೆ
ಸಂದೇಶಕರನ್ನು ಕಳುಹಿಸಿದನು. ಹೀರಾಮನು ದೇವ
ದಾರುಮರಗಳನ್ನು, ಬಡಗಿಗಳನ್ನು ಮತ್ತು ಕಲ್ಲಿನಲ್ಲಿ ಕೆತ್ತನೆ
ಮಾಡುವ ಶಿಲ್ಪಿಗಳನ್ನೂ ಸಹ ಕಳುಹಿಸಿದನು. ಅವರು
ದಾವೀದನಿಗಾಗಿ ಒಂದು ಮನೆಯನ್ನು ಕಟ್ಟಿದರು.
12ಯೆಹೋವನು ನಿಜವಾಗಿಯೂ ತನ್ನನ್ನು ಇಸ್ರೇಲಿನ
ರಾಜನನ್ನಾಗಿ ಮಾಡಿದ್ದಾನೆಂಬುದನ್ನೂ ಆತನು ತನ್ನ
ಜನರಾದ ಇಸ್ರೇಲರಿಗಾಗಿ ತನ್ನ ರಾಜ್ಯವನ್ನು ಸ್ಥಿರಪಡಿಸಿ
ದ್ದಾನೆಂತಲೂ ದಾವೀದನು ಇದರ ಮೂಲಕ ತಿಳಿದು
ಕೊಂಡನು.
13ದಾವೀದನು ಹೆಬ್ರೋನಿನಿಂದ ಜೆರುಸಲೇಮಿಗೆ
ಹೋದನು. ದಾವೀದನಿಗೆ ಜೆರುಸಲೇಮಿನಲ್ಲಿ ಅನೇಕ
ಪತ್ನಿಯರೂ ಉಪಪತ್ನಿಯರೂ ಇದ್ದರು. ಜೆರುಸಲೇಮಿ
ನಲ್ಲಿ ದಾವೀದನಿಗೆ ಅನೇಕ ಮಕ್ಕಳು ಹುಟ್ಟಿದರು.
14ಜೆರುಸಲೇಮಿನಲ್ಲಿ ದಾವೀದನಿಗೆ ಹುಟ್ಟಿದ ಗಂಡು
ಮಕ್ಕಳ ಹೆಸರುಗಳು: ಶಮ್ಮೂವ, ಶೋಬಾಬ್,
ನಾತಾನ್, ಸೊಲೊಮೋನ್, 15ಇಬ್ಹಾರ್, ಎಲೀಷೂವ,
ನೆಫೆಗ್, ಯಾಫೀಯ, 16ಎಲೀಷಾಮ, ಎಲ್ಯಾದ,
ಎಲೀಫೆಲೆಟ್.

### ದಾವೀದನು ಫಿಲಿಷ್ಟಿಯರ ವಿರುದ್ಧ ಯುದ್ಧಕ್ಕೆ ಹೋಗುವನು

17ಇಸ್ರೇಲರು ದಾವೀದನನ್ನು ತಮ್ಮ ರಾಜನನ್ನಾಗಿ
ಅಭಿಷೇಕಿಸಿದ್ದಾರೆಂಬುದು ಫಿಲಿಷ್ಟಿಯರಿಗೆ ತಿಳಿದಾಗ,
ಫಿಲಿಷ್ಟಿಯರೆಲ್ಲ ದಾವೀದನನ್ನು ಹಿಡಿಯಲು ಹಾಗೂ
ಅವನನ್ನು ಕೊಲ್ಲಲು ಹೋದರು. ಆದರೆ ಈ ಸುದ್ದಿಯು
ದಾವೀದನಿಗೆ ತಿಳಿಯಿತು. ಅವನು ಕೋಟೆಗೆ ಹೊರಟು
ಹೋದನು. 18ಫಿಲಿಷ್ಟಿಯರು ಬಂದು ರೆಫಾಯೀಮ್
ಕಣಿವೆಯಲ್ಲಿ ಪಾಳೆಯವನ್ನು ಮಾಡಿದರು.
19ದಾವೀದನು ಯೆಹೋವನಿಗೆ ''ಫಿಲಿಷ್ಟಿಯರ
ವಿರುದ್ಧ ಹೋರಾಡಲು ನಾನು ಹೋಗಬಹುದೇ?
ಫಿಲಿಷ್ಟಿಯರನ್ನು ಸೋಲಿಸಲು ನೀನು ಸಹಾಯ
ಮಾಡುವೆಯಾ?''ಎಂದು ಕೇಳಿದನು.

ಯೆಹೋವನು ದಾವೀದನಿಗೆ, ''ಹೋಗು, ಫಿಲಿಷ್ಟಿಯ
ರನ್ನು ಸೋಲಿಸಲು ನಾನು ಖಂಡಿತವಾಗಿಯೂ ನಿನಗೆ
ಸಹಾಯ ಮಾಡುತ್ತೇನೆ''ಎಂದು ಹೇಳಿದನು.

20ಆಗ ದಾವೀದನು ಬಾಳ್‌ಪೆರಾಚೀಮ್‌ಗೆ*
ಬಂದನು. ಅಲ್ಲಿ ಅವನು ಫಿಲಿಷ್ಟಿಯರನ್ನು ಸೋಲಿಸಿದನು.
ದಾವೀದನು, ''ಕಟ್ಟೆಯೊಡೆದ ಪ್ರವಾಹವು ನುಗ್ಗಿ ನಾಶ
ಮಾಡುವಂತೆ ಯೆಹೋವನು ನನ್ನ ಶತ್ರುಗಳನ್ನು ನನ್ನ
ಎದುರಿನಲ್ಲೇ ನಾಶಪಡಿಸಿದನು''ಎಂದನು. ಆದುದರಿಂದ
ಅವನು ಆ ಸ್ಥಳಕ್ಕೆ ''ಬಾಳ್‌ಪೆರಾಚೀಮ್''ಎಂದು ಹೆಸರಿ
ಟ್ಟನು. 21ಫಿಲಿಷ್ಟಿಯರು ತಮ್ಮ ದೇವರ ವಿಗ್ರಹಗಳನ್ನು
ಬಾಳ್‌ಪೆರಾಚೀಮ್‌ನಲ್ಲಿಯೇ ಬಿಟ್ಟು ಹೋದರು.
ದಾವೀದನು ಮತ್ತು ಅವನ ಜನರು ಈ ವಿಗ್ರಹಗಳನ್ನು
ತೆಗೆದುಕೊಂಡು ಹೋದರು.

---

**ನೀನು ನಮ್ಮ ನಗರದೊಳಕ್ಕೆ ಬರಲಾಗದು** ಜೆರುಸಲೇಮ್ ನಗರವನ್ನು ಬೆಟ್ಟದ ಮೇಲೆ ಕಟ್ಟಿದ್ದರು. ಆ ನಗರದ ಸುತ್ತಲೂ ಎತ್ತರವಾದ ಗೋಡೆಗಳಿದ್ದುದರಿಂದ, ಅದನ್ನು ವಶಪಡಿಸಿಕೊಳ್ಳುವುದು ಕಠಿಣವಾಗಿತ್ತು.

**ದಾವೀದನಗರ** ಜೆರುಸಲೇಮ್ ನಗರದ ಒಂದು ಭಾಗ.

**ಜಲಮಾರ್ಗದ ಮೂಲಕ** ಪುರಾತನ ನಗರವಾದ ಜೆರುಸಲೇಮ್ ನಗರದ ನೆಲದ ಒಳಗಡೆ ನಿರ್ಮಿಸಿದ್ದ ಒಂದು ಜಲಮಾರ್ಗ. ದಾವೀದನು ಮತ್ತು ಅವನ ಜನರು ನಗರಕ್ಕೆ ಈ ಮಾರ್ಗದಲ್ಲಿ ಹೋದರು.

**ಮನೆಯೊಳಕ್ಕೆ** ಹೀಗೆಂದರೆ ''ಮನೆ, ಅರಮನೆ ಅಥವಾ ದೇವಾಲಯ''ಎಂದು.

**ಮಿಲ್ಲೋ** ಬಹುಶಃ, ಚೀಯೋನ್ ಪುರಾತನ ಕೋಟೆಯ ಒಂದು ಶಕ್ತಿಯುತವಾದ ಸ್ಥಳ.

**ಬಾಳ್‌ಪೆರಾಚೀಮ್** ಹೀಬ್ರೂ ಭಾಷಯಲ್ಲಿ ಇದರರ್ಥ: ''ಪ್ರಭುವು ಒಡೆದು ನುಗ್ಗಿದ.''

22ಫಿಲಿಷ್ಟಿಯರು ಮತ್ತೆ ರೆಫಾಯೀಮ್ ಕಣಿವೆಗೆ ಬಂದು
ಪಾಳೆಯವನ್ನು ಮಾಡಿದರು.
23ದಾವೀದನು ಯೆಹೋವನಿಗೆ ಪ್ರಾರ್ಥಿಸಿದನು. ಈ
ಸಮಯದಲ್ಲಿ ಯೆಹೋವನು ದಾವೀದನಿಗೆ, ‘‘ಅಲ್ಲಿಗೆ
ಹೋಗಬೇಡ. ಅವರ ಸೈನ್ಯವನ್ನು ಸುತ್ತಿಕೊಂಡು ಹಿಂದಿ
ನಿಂದ ಅವರನ್ನು ಸಮೀಪಿಸು. ಬಾಲ್ಸಾಮ್ ಮರಗಳಿರುವ
ಮತ್ತೊಂದು ಕಡೆಯಿಂದ ಅವರ ಮೇಲೆ ಆಕ್ರಮಣ
ಮಾಡು. 24ಮರಗಳ ತುದಿಯಲ್ಲಿರುವ ನಿಮಗೆ ಫಿಲಿಷ್ಟಿ
ಯರು ಯುದ್ಧಕ್ಕೆ ಹೊರಡುವುದು ಕೇಳಿಸುತ್ತದೆ. ಆಗ
ನೀನು ತ್ವರಿತಗತಿಯಿಂದ ಕಾರ್ಯನಿರತನಾಗು. ಆಗ
ಯೆಹೋವನಾದ ನಾನು ನಿನಗಾಗಿ ಅದೇ ಸಮಯದಲ್ಲಿ
ಫಿಲಿಷ್ಟಿಯರನ್ನು ಸೋಲಿಸಲು ನಿಮ್ಮ ಮುಂದೆ ನಾನು
ಹೋಗುತ್ತೇನೆ’’ಎಂದು ಹೇಳಿದನು.
25ಯೆಹೋವನು ಆಜ್ಞಾಪಿಸಿದಂತೆಯೇ ದಾವೀದನು
ಮಾಡಿದನು. ಅವನು ಫಿಲಿಷ್ಟಿಯರನ್ನು ಸೋಲಿಸಿ ಗೆಬ
ದಿಂದ ಗೆಜೆರಿನವರೆಗೆ ಅವರನ್ನು ಅಟ್ಟಿಸಿಕೊಂಡು ಹೋಗಿ
ದಾರಿಯುದ್ದಕ್ಕೂ ಅವರನ್ನು ಕೊಂದನು.

### ದೇವರ ಪವಿತ್ರಪೆಟ್ಟಿಗೆಯನ್ನು ಜೆರುಸಲೇಮಿಗೆ ತಂದರು

6 ಇಸ್ರೇಲಿನಲ್ಲಿ ಆರಿಸಲ್ಪಟ್ಟ ಮೂವತ್ತು ಸಾವಿರ ಮಂದಿ
ಯನ್ನು ದಾವೀದನು ಮತ್ತೆ ಒಟ್ಟುಗೂಡಿಸಿದನು.
2ಆಗ ದಾವೀದನು ತನ್ನ ಜನರೊಂದಿಗೆ ಯೆಹೂದದ
ಬಾಳಾ ಎಂಬಲ್ಲಿಗೆ ಹೋದನು. ಯೆಹೂದದ ಬಾಳಾ
ಎಂಬ ಸ್ಥಳದಲ್ಲಿದ್ದ ಪವಿತ್ರ ಪೆಟ್ಟಿಗೆಯನ್ನು ಜೆರುಸಲೇಮಿಗೆ
ತೆಗೆದುಕೊಂಡು ಬಂದನು. ಯೆಹೋವನನ್ನು ಆರಾಧಿಸು
ವುದಕ್ಕಾಗಿ ಜನರು ಪವಿತ್ರ ಪೆಟ್ಟಿಗೆಯ ಬಳಿ ಹೋಗು
ತ್ತಿದ್ದರು. ಪವಿತ್ರ ಪೆಟ್ಟಿಗೆಯು ಯೆಹೋವನ ಪೀಠ
ದಂತಿತ್ತು. ಪವಿತ್ರ ಪೆಟ್ಟಿಗೆಯ ಮೇಲ್ಭಾಗದಲ್ಲಿ ಕೆರೂಬಿಗ
ಳಿದ್ದವು. ಯೆಹೋವನು ರಾಜನಂತೆ ದೂತರ ಮೇಲೆ
ಆಸೀನನಾಗಿದ್ದನು. 3ದಾವೀದನ ಜನರು ಪವಿತ್ರ ಪೆಟ್ಟಿಗೆ
ಯನ್ನು ಹೊಸಬಂಡಿಯ ಮೇಲಿಟ್ಟರು. ಅವರು ಬೆಟ್ಟದ
ಮೇಲಿರುವ ಅಬೀನಾದಾಬನ ಮನೆಯಿಂದ ದೇವರ
ಪವಿತ್ರ ಪೆಟ್ಟಿಗೆಯನ್ನು ತಂದರು. ಅಬೀನಾದಾಬನ ಮಕ್ಕ
ಳಾದ ಉಜ್ಜನೂ ಅಹಿಯೋವನೂ ಆ ಬಂಡಿಯನ್ನು
ಹೊಡೆದರು.
4ಬೆಟ್ಟದ ಮೇಲಿನ ಅಬೀನಾದಾಬನ ಮನೆಯಿಂದ
ಹೊಸಬಂಡಿಯನ್ನು ತರುವಾಗ ಉಜ್ಜನೂ ಅಹಿಯೋ-
ವನೂ ಮುನ್ನಡೆಸಿದರು. ಈ ಬಂಡಿಯ ಮೇಲೆ ದೇವರ
ಪವಿತ್ರ ಪೆಟ್ಟಿಗೆಯಿತ್ತು. ಉಜ್ಜನೂ ಬಂಡಿಯ ಮೇಲಿ
ದ್ದನು. ಪವಿತ್ರ ಪೆಟ್ಟಿಗೆಯ ಮುಂದೆ ಅಹಿಯೋವನು
ನಡೆಯುತ್ತಿದ್ದನು. 5ದಾವೀದನು ಮತ್ತು ಇಸ್ರೇಲರೆಲ್ಲರು
ಕಿನ್ನರಿ, ದಮ್ಮಡಿ, ಝಲ್ಲರಿ, ತಾಳಗಳನ್ನು ಬಾರಿಸುತ್ತಾ
ಸನ್ನಿಧಿಯಲ್ಲಿ ನೃತ್ಯಮಾಡುತ್ತಿದ್ದರು. 6ದಾವೀದನ ಜನರು
ನಾಕೋನನ ಕಣಕ್ಕೆ ಬಂದಾಗ ಹಸುಗಳು ಮುಗ್ಗರಿಸಿದವು
ಹಾಗೂ ದೇವರ ಪವಿತ್ರ ಪೆಟ್ಟಿಗೆಯು ಬಂಡಿಯಿಂದ ಕೆಳಗೆ
ಬೀಳುವುದರಲ್ಲಿತ್ತು. ಪವಿತ್ರ ಪೆಟ್ಟಿಗೆಯು ಬೀಳದಂತೆ
ಉಜ್ಜನು ಹಿಡಿದನು. 7ಯೆಹೋವನು ಉಜ್ಜನ ಮೇಲೆ
ಕೋಪಗೊಂಡು ಅವನನ್ನು ಕೊಂದನು. * ಉಜ್ಜನು
ದೇವರಿಗೆ ಗೌರವವನ್ನು ತೋರಿಸದೆ ಪವಿತ್ರ ಪೆಟ್ಟಿಗೆಯನ್ನು
ಸ್ಪರ್ಶಿಸಿದನು. ದೇವರ ಪವಿತ್ರ ಪೆಟ್ಟಿಗೆಯ ಹತ್ತಿರದಲ್ಲೇ
ಉಜ್ಜನು ಸತ್ತನು. 8ಯೆಹೋವನು ಉಜ್ಜನನ್ನು ಕೊಂದದ್ದ
ರಿಂದ ದಾವೀದನು ತಳಮಳಗೊಂಡನು. ದಾವೀದನು ಆ
ಸ್ಥಳವನ್ನು ‘‘ಪೆರೆಚುಜ್ಜಾ’’* ಎಂದು ಕರೆದನು. ಆ ಸ್ಥಳ
ವನ್ನು ಇಂದಿಗೂ ‘‘ಪೆರೆಚುಜ್ಜಾ’’ ಎಂದೇ ಕರೆಯುತ್ತಾರೆ.
9ಅಂದು ದಾವೀದನು ಯೆಹೋವನಿಗೆ ಭಯಪಟ್ಟು,
‘‘ದೇವರ ಪವಿತ್ರ ಪೆಟ್ಟಿಗೆಯನ್ನು ನಾನಿರುವಲ್ಲಿಗೆ ತೆಗೆದು
ಕೊಂಡು ಹೋಗುವುದು ಹೇಗೆ?’’ ಎಂದು ಕೇಳಿದನು.
10ಆದ್ದರಿಂದ ದಾವೀದನು ಯೆಹೋವನ ಪವಿತ್ರ ಪೆಟ್ಟಿಗೆ
ಯನ್ನು ದಾವೀದನಗರದೊಳಕ್ಕೆ ತರಲಿಲ್ಲ. ದಾವೀದನು
ಪವಿತ್ರ ಪೆಟ್ಟಿಗೆಯನ್ನು ಗತ್‌ನ ಓಬೇದೆದೋಮನ*
ಮನೆಯಲ್ಲಿಟ್ಟನು. 11ಓಬೇದೆದೋಮನ ಮನೆಯಲ್ಲಿ
ಪವಿತ್ರ ಪೆಟ್ಟಿಗೆಯು ಮೂರು ತಿಂಗಳ ಕಾಲ ಇತ್ತು. ಓಬೇದೆ
ದೋಮನನ್ನೂ ಅವನ ಕುಟುಂಬವನ್ನೂ ಯೆಹೋವನು
ಆಶೀರ್ವದಿಸಿದನು.
12ತರುವಾಯ ಜನರು ದಾವೀದನಿಗೆ, ‘‘ದೇವರ ಪವಿತ್ರ
ಪೆಟ್ಟಿಗೆಯು ಓಬೇದೆದೋಮನ ಮನೆಯಲ್ಲಿರುವುದ
ರಿಂದ ಯೆಹೋವನು ಅವನ ಕುಟುಂಬವನ್ನೂ ಅವನ
ಸಮಸ್ತವನ್ನೂ ಆಶೀರ್ವದಿಸಿದನು. ಎಂದು ಹೇಳಿದರು.
ಆದ್ದರಿಂದ ದಾವೀದನು ಹೋಗಿ ಓಬೇದೆದೋಮನ
ಮನೆಯಿಂದ ಪವಿತ್ರ ಪೆಟ್ಟಿಗೆಯನ್ನು ಸಂತೋಷದಿಂದ
ತಂದನು. 13ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಹೊತ್ತ
ವರು ಆರು ಹೆಜ್ಜೆಗಳನ್ನು ನಡೆದು ನಿಂತಾಗ ದಾವೀದನು
ಒಂದು ಹೋರಿಯನ್ನು ಮತ್ತು ಕೊಬ್ಬಿದ ಕರುವನ್ನು
ಯಜ್ಞವಾಗಿ ಅರ್ಪಿಸಿದನು. 14ಆಗ ದಾವೀದನು
ಯೆಹೋವನ ಸನ್ನಿಧಿಯಲ್ಲಿ ತನ್ನ ಶಕ್ತಿ ಮೀರಿ ನರ್ತಿಸಿ
ದನು. ಅವನು ಏಫೋದನ್ನು ಧರಿಸಿದ್ದನು.
15ಯೆಹೋವನ ಪವಿತ್ರ ಪೆಟ್ಟಿಗೆಯನ್ನು ನಗರಕ್ಕೆ ತರು
ವಾಗ ದಾವೀದನು ಮತ್ತು ಇಸ್ರೇಲರೆಲ್ಲರು ಸಂತೋಷ
ದಿಂದ ಆರ್ಭಟಿಸಿದರು; ತುತ್ತೂರಿಯನ್ನು ಊದಿದರು.

---

**ಯೆಹೋವನು … ಕೊಂದನು** ದೇವರ ಪವಿತ್ರ ಪೆಟ್ಟಿಗೆಯನ್ನಾಗಲೀ ಇಲ್ಲವೇ ಪವಿತ್ರ ಗುಡಾರದ ಪೀಠೋಪಕರಣಗಳನ್ನಾಗಲೀ ಲೇವಿಯರು ಮಾತ್ರ ಹೊರಬೇಕಾಗಿದ್ದಿತು. ಉಜ್ಜನು ಲೇವಿಯನಾಗಿರಲಿಲ್ಲ.

**ಪೆರೆಚುಜ್ಜಾ** ‘‘ಉಜ್ಜನಿಗೆ ದಂಡನೆ’’ ಎಂದು ಹೀಬ್ರೂವಿನಲ್ಲಿ ಹೇಳುತ್ತಾರೆ.

**ಗತ್‌ನ ಓಬೇದೆದೋಮ್** ಜೆರುಸಲೇಮಿನ ಸಮೀಪದಲ್ಲಿ ವಾಸಿಸುತ್ತಿದ್ದ ಲೇವಿಯರ ಕುಲಕ್ಕೆ ಸೇರಿದ ಒಬ್ಬ ವೃದ್ಧ.

[16] ಸೌಲನ ಮಗಳಾದ ಮೀಕಲಳು ಕಿಟಕಿಯಿಂದ ಹೊರಗೆ
ನೋಡುತ್ತಿದ್ದಳು. ಅದೇ ಸಮಯದಲ್ಲಿ ಯೆಹೋವನ
ಪವಿತ್ರ ಪೆಟ್ಟಿಗೆಯು ನಗರಕ್ಕೆ ಬಂದಿತು. ದಾವೀದನು
ಯೆಹೋವನ ಸನ್ನಿಧಿಯಲ್ಲಿ ಜಿಗಿಯುತ್ತಾ ಕುಣಿದಾಡುತ್ತಿ
ದ್ದನು. ಮೀಕಲಳು ಇದನ್ನು ಕಂಡು ದಾವೀದನನ್ನು ತನ್ನ
ಹೃದಯದಲ್ಲಿ ತಿರಸ್ಕರಿಸಿದಳು; ಅವನು ತನ್ನನ್ನು ತಾನೇ
ಮೂರ್ಖನನ್ನಾಗಿ ಮಾಡಿಕೊಳ್ಳುತ್ತಿದ್ದಾನೆ ಎಂದು
ಆಲೋಚಿಸಿಕೊಂಡಳು.
[17] ದಾವೀದನು ಪವಿತ್ರ ಪೆಟ್ಟಿಗೆಗಾಗಿ ಒಂದು ಗುಡಾರ
ವನ್ನು ನಿರ್ಮಿಸಿದನು. ಇಸ್ರೇಲರು, ಯೆಹೋವನ ಪವಿತ್ರ
ಪೆಟ್ಟಿಗೆಯನ್ನು ಗುಡಾರದಲ್ಲಿ ಪ್ರತ್ಯೇಕವಾದ ಸ್ಥಳದಲ್ಲಿ
ಇಟ್ಟರು. ಆಗ ದಾವೀದನು ಯೆಹೋವನ ಸನ್ನಿಧಿಯಲ್ಲಿ
ಸರ್ವಾಂಗಹೋಮಗಳನ್ನೂ ಸಮಾಧಾನ ಯಜ್ಞಗಳನ್ನೂ
ಸಮರ್ಪಿಸಿದನು.
[18] ಬಳಿಕ, ದಾವೀದನು ಸರ್ವಶಕ್ತನಾದ ಯೆಹೋವನ
ಹೆಸರಿನಲ್ಲಿ ಜನರನ್ನು ಆಶೀರ್ವದಿಸಿದನು. [19] ದಾವೀದನು
ಇಸ್ರೇಲಿನ ಜನರಲ್ಲಿ ಪ್ರತಿಯೊಬ್ಬ ಗಂಡಸಿಗೂ ಹೆಂಗಸಿಗೂ
ಒಂದು ತುಂಡು ರೊಟ್ಟಿಯನ್ನೂ ಒಣಗಿದ ದ್ರಾಕ್ಷೆಹಣ್ಣಿನ
ಉಂಡೆಯನ್ನೂ ಒಂದು ಮಾಂಸವನ್ನೂ ಕೊಟ್ಟನು. ಆಗ
ಜನರೆಲ್ಲರೂ ಮನೆಗಳಿಗೆ ಹೋದರು.

## ಮೀಕಲಳು ದಾವೀದನನ್ನು ತಿರಸ್ಕರಿಸಿದಳು

[20] ದಾವೀದನು ತನ್ನ ಕುಟುಂಬದವರನ್ನು ಆಶೀರ್ವದಿ
ಸಲು ಹೋದನು. ಆದರೆ ಸೌಲನ ಮಗಳಾದ ಮೀಕಲಳು
ಅವನನ್ನು ಭೇಟಿಮಾಡಲು ಹೊರಗೆ ಬಂದು, ‘‘ಇಸ್ರೇಲರ
ರಾಜನು ಈ ದಿನ ತನ್ನ ಗೌರವವನ್ನು ಕಾಪಾಡಿಕೊಳ್ಳಲಿಲ್ಲ!
ನಾಚಿಕೆಯಿಲ್ಲದೆ ತನ್ನೆಲ್ಲ ಬಟ್ಟೆಗಳನ್ನೂ ತೆಗೆದುಹಾಕುವ
ಮೂರ್ಖನಂತೆ, ನೀನು ನಿನ್ನ ಸೇವಕರ ಮತ್ತು ದಾಸಿಯರ
ಮುಂದೆ ನಿನ್ನ ಬಟ್ಟೆಗಳನ್ನೆಲ್ಲ ತೆಗೆದುಹಾಕಿದೆಯಲ್ಲ’’*
ಎಂದಳು. [21] ಆಗ ದಾವೀದನು ಮೀಕಲಳಿಗೆ,
‘‘ಯೆಹೋವನು ನಿನ್ನ ತಂದೆಯನ್ನಾಗಲೀ ಅವರ
ಕುಟುಂಬದ ಇತರ ಯಾರನ್ನೇ ಆಗಲಿ ಆರಿಸಿಕೊಳ್ಳದೆ
ನನ್ನನ್ನೇ ತನ್ನ ಇಸ್ರೇಲರ ನಾಯಕನನ್ನಾಗಿ ಆರಿಸಿಕೊಂಡಿ
ದ್ದಾನೆ. ಆದುದರಿಂದಲೇ ನಾನು ಯೆಹೋವನ ಸನ್ನಿಧಿ
ಯಲ್ಲಿ ಕುಣಿದಾಡಿದೆನು. [22] ಆತನ ಮುಂದೆ ಇನ್ನೂ ಹೀನ
ವಾಗಿ ಕಾಣಿಸಿಕೊಳ್ಳುವುದಕ್ಕೂ ನನ್ನನ್ನು ನಾನು ಕಡೆಗಣಿಸಿ
ಕೊಳ್ಳುವುದಕ್ಕೂ ಸಿದ್ಧನಿದ್ದೇನೆ. ಆದರೆ ನೀನು ಯಾವ
ದಾಸಿಯರ ಬಗ್ಗೆ ಮಾತನಾಡಿದೆಯೋ ಅವರು ನನ್ನನ್ನು
ಗೌರವಿಸುತ್ತಾರೆ’’ ಎಂದು ಹೇಳಿದನು.

[23] ಸೌಲನ ಮಗಳಾದ ಮೀಕಲಳು ಬಂಜೆಯಾಗಿ
ಉಳಿದಳು. ಅವಳು ಮಕ್ಕಳೇ ಇಲ್ಲದೆ ಸತ್ತುಹೋದಳು.

## ದೇವಾಲಯ ಕಟ್ಟಲು ದಾವೀದನ ಅಪೇಕ್ಷೆ

7 ದಾವೀದನು ತನ್ನ ಅರಮನೆಯಲ್ಲಿ ಸುಖವಾಗಿ
ವಾಸಿಸುವಂತೆಯೂ ಅವನ ಸುತ್ತಲಿನ ಶತ್ರುಗಳಿಂದ
ಭಯವಿಲ್ಲದಂತೆಯೂ ಯೆಹೋವನು ಮಾಡಿದನು.
[2] ಆಗ ರಾಜನಾದ ದಾವೀದನು ಪ್ರವಾದಿಯಾದ ನಾತಾನ
ನಿಗೆ, ‘‘ನೋಡು, ನಾನು ದೇವದಾರುಮರದಿಂದ ನಿರ್ಮಿ
ಸಿದ ಮನೆಯಲ್ಲಿ ವಾಸವಾಗಿದ್ದೇನೆ; ಆದರೆ ದೇವರ ಪವಿತ್ರ
ಪೆಟ್ಟಿಗೆಯನ್ನು ಇನ್ನೂ ಗುಡಾರದಲ್ಲಿಯೇ ಇಟ್ಟಿದ್ದೇನೆ.
ಅದಕ್ಕಾಗಿ ಒಂದು ಆಲಯವನ್ನು ಕಟ್ಟಬೇಕು’’ ಎಂದು
ಹೇಳಿದನು.
[3] ನಾತಾನನು ರಾಜನಾದ ದಾವೀದನಿಗೆ, ‘‘ನೀನು ನಿಜ
ವಾಗಿಯೂ ಏನನ್ನು ಮಾಡಬೇಕೆಂದಿರುವೆಯೋ ಅದನ್ನು
ಮಾಡು; ಯೆಹೋವನು ನಿನ್ನೊಂದಿಗಿದ್ದಾನೆ’’ ಎಂದು
ಹೇಳಿದನು.
[4] ಆದರೆ ಅಂದು ರಾತ್ರಿ ನಾತಾನನಿಗೆ ಯೆಹೋವನು
ಹೀಗೆ ಹೇಳಿದನು [5] ‘‘ನೀನು ನನ್ನ ಸೇವಕನಾದ ದಾವೀದನ
ಬಳಿಗೆ ಹೋಗಿ ಈ ಸಂದೇಶವನ್ನು ತಿಳಿಸು: ‘ನನ್ನ
ವಾಸಕ್ಕಾಗಿ ಆಲಯನ್ನು ಕಟ್ಟುವ ವ್ಯಕ್ತಿಯು ನೀನಲ್ಲ.
[6] ಈಜಿಪ್ಟಿನಿಂದ ಇಸ್ರೇಲರನ್ನು ಹೊರತಂದ ಸಮಯದಲ್ಲಿ
ನಾನು ಆಲಯದಲ್ಲಿ ವಾಸಮಾಡಲಿಲ್ಲ. ನಾನು ಗುಡಾರ
ದಲ್ಲಿ ವಾಸಮಾಡುತ್ತಾ ಸಂಚರಿಸಿದೆನು. ಗುಡಾರವೇ ನನ್ನ
ಆಲಯವಾಗಿತ್ತು. [7] ನನಗಾಗಿ ದೇವದಾರು ಮರದಿಂದ
ಆಲಯ ಕಟ್ಟುವಂತೆ ಇಸ್ರೇಲರ ಯಾವ ಕುಲದವರ
ನ್ನಾಗಲೀ ನಾನು ಕೇಳಿಕೊಳ್ಳಲಿಲ್ಲ ಎಂಬುದಾಗಿ
ಯೆಹೋವನು ತಿಳಿಸುತ್ತಾನೆ’ ಎಂದು ಹೇಳು.
[8] ‘‘ನೀನು ಇದನ್ನು ನನ್ನ ಸೇವಕನಾದ ದಾವೀದನಿಗೆ
ಹೇಳಲೇಬೇಕು: ‘ಸರ್ವಶಕ್ತನಾದ ಯೆಹೋವನು ಹೇಳು
ವುದೇನೆಂದರೆ, ಹುಲ್ಲುಗಾವಲಿನಲ್ಲಿ ಕುರಿಕಾಯುತ್ತಿದ್ದ
ನಿನ್ನನ್ನು ನಾನು ನನ್ನ ಜನರಾದ ಇಸ್ರೇಲರಿಗೆ ನಾಯಕನಾಗಿ
ಮಾಡಲು ಕರೆತಂದೆನು. [9] ನೀನು ಹೋದಸ್ಥಳಗಳಲ್ಲೆಲ್ಲಾ
ನಿನ್ನೊಂದಿಗಿದ್ದೆನು. ನಿನ್ನ ಶತ್ರುಗಳನ್ನು ಸೋಲಿಸಿದೆನು.
ನಾನು ನಿನ್ನನ್ನು ಲೋಕದ ಇತರ ಮಹಾಪುರುಷ
ರಂತೆಯೇ ಪ್ರಸಿದ್ಧಿಗೊಳಿಸುವೆನು. [10-11] ನಾನು ನನ್ನ ಜನ
ರಾದ ಇಸ್ರೇಲರಿಗೆ ಒಂದು ಸ್ಥಳವನ್ನು ಆರಿಸಿಕೊಂಡಿದ್ದೇನೆ.
ಇಸ್ರೇಲರನ್ನು ನೆಲೆಗೊಳಿಸಿದ್ದೇನೆ. ವಾಸಿಸುವುದಕ್ಕಾಗಿ
ಅವರ ಸ್ವಂತ ಸ್ಥಳವನ್ನು ಅವರಿಗೆ ಕೊಟ್ಟಿದ್ದೇನೆ. ಆದ್ದರಿಂದ
ಈಗ ಅವರು ಅಲೆದಾಡುವ ಅಗತ್ಯವೇ ಇಲ್ಲ. ಮೊದಲು
ನನ್ನ ಜನರಾದ ಇಸ್ರೇಲರನ್ನು ಮುನ್ನಡೆಸಲು ನ್ಯಾಯಾಧಿ
ಪತಿಗಳನ್ನು ಕಳುಹಿಸಿದೆನು. ದುಷ್ಟಜನರು ಅವರಿಗೆ
ತೊಂದರೆಕೊಟ್ಟರು. ಆದರೆ ಅದು ಈಗ ಸಂಭವಿಸುವು

---

**ನೀನು ... ತೆಗೆದು ಹಾಕಿದೆಯಲ್ಲ** ದಾವೀದನು ಏಫೋದನ್ನು ಮಾತ್ರ ಧರಿಸಿದ್ದನು. ಅದು ಅವನ ದೇಹವನ್ನು ಎಷ್ಟು ಮುಚ್ಚಿತ್ತೆಂಬುದು ಗೊತ್ತಿಲ್ಲ.

ದಿಲ್ಲ. ನಿನಗೆ ಶತ್ರುಭಯವಿಲ್ಲದಂತೆ ಮಾಡುತ್ತೇನೆ; ನಿನ್ನ
ಕುಟುಂಬದಿಂದಲೇ ರಾಜರುಗಳನ್ನು ಬರಮಾಡುತ್ತೇನೆ.
[12]‘‘ನಿನ್ನ ದಿನಗಳು ಮುಗಿದುಹೋಗುತ್ತವೆ; ನೀನು ನಿನ್ನ
ಪೂರ್ವಿಕರ ಜೊತೆಯಲ್ಲಿ ಸೇರುತ್ತಿ. ಆ ಸಮಯದಲ್ಲಿ,
ನಿನ್ನ ಮಕ್ಕಳಲ್ಲಿ ಒಬ್ಬನನ್ನು ರಾಜನನ್ನಾಗಿ ಮಾಡಿ ಅವನ
ರಾಜ್ಯವನ್ನು ಭದ್ರಗೊಳಿಸುತ್ತೇನೆ. [13]ಅವನು ನನ್ನ ಹೆಸರಿ
ಗಾಗಿ ಒಂದು ಆಲಯವನ್ನು ನಿರ್ಮಿಸುತ್ತಾನೆ. ಅವನ
ರಾಜ್ಯವು ಸದಾಕಾಲಕ್ಕೂ ಇರುವಂತೆ ನಾನು ಮಾಡುತ್ತೇನೆ.
[14]ನಾನು ಅವನಿಗೆ ತಂದೆಯಾಗಿರುವೆನು; ಅವನು ನನಗೆ
ಮಗನಾಗಿರುವನು. ಅವನು ಪಾಪಗಳನ್ನು ಮಾಡಿದರೆ
ಇತರ ಜನರ ಮೂಲಕ ನಾನು ಅವನನ್ನು ದಂಡಿಸುವೆನು.
ಅವರೇ ನನ್ನ ಚಾವಟಿಗಳಾಗಿರುತ್ತಾರೆ. [15]ಆದರೆ ನಾನು
ಅವನನ್ನು ಪ್ರೀತಿಸುವುದನ್ನು ನಿಲ್ಲಿಸುವುದಿಲ್ಲ. ಅವನು
ಯಾವಾಗಲೂ ನನ್ನ ಕರುಣಾಶ್ರಯದಲ್ಲಿರುವನು.
ಸೌಲನ ಮೇಲಿಟ್ಟಿದ್ದ ಪ್ರೀತಿಯನ್ನು ಮತ್ತು ದಯೆಯನ್ನು
ಹಿಂತೆಗೆದುಕೊಂಡೆನು. ಸೌಲನನ್ನು ನಿನ್ನ ಎದುರಿನಿಂದ
ನಾನು ದೂರತಳ್ಳಿದೆನು. ನಾನು ನಿನ್ನ ಕುಟುಂಬಕ್ಕೆ ಹಾಗೆ
ಮಾಡುವುದಿಲ್ಲ. [16]ನಿನ್ನ ಕುಟುಂಬ ಮತ್ತು ರಾಜ್ಯ
ಎಂದೆಂದಿಗೂ ಸ್ಥಿರವಾಗಿರುವುದು. ನಿನ್ನ ಸಿಂಹಾಸನವು
ಶಾಶ್ವತವಾಗಿರುವುದು.’’ [17]ಆ ದರ್ಶನದಲ್ಲಿ ದೇವರು
ತನಗೆ ಹೇಳಿದ ಪ್ರತಿಯೊಂದನ್ನು ನಾತಾನನು ದಾವೀದ
ನಿಗೆ ತಿಳಿಸಿದನು.

## ದಾವೀದನು ದೇವರಲ್ಲಿ ಪ್ರಾರ್ಥಿಸುವನು

[18]ಆಗ ರಾಜನಾದ ದಾವೀದನು ಹೋಗಿ ಯೆಹೋವನ
ಸನ್ನಿಧಿಯಲ್ಲಿ ಕುಳಿತು, ‘‘ನನ್ನ ಒಡೆಯನಾದ
ಯೆಹೋವನೇ, ನಾನೆಷ್ಟರವನು? ನನ್ನ ಕುಲ ಎಷ್ಟರದು?
ನೀನು ನನ್ನನ್ನೇಕೆ ಇಷ್ಟು ಉದ್ಧರಿಸಿದೆ? [19]ನಾನು ಕೇವಲ
ನಿನ್ನ ಸೇವಕನು. ನೀನು ನನ್ನ ಮೇಲೆ ಬಹಳ ದಯೆ ತೋರಿ
ಸಿರುವೆ . ನನಗೆ ಮಾತ್ರವಲ್ಲದೆ ನೀನು ನನ್ನ ಮುಂದಿನ
ಸಂತಾನದ ಬಗ್ಗೆಯೂ ಇದೇ ರೀತಿಯ ದಯಾಪರವಾದ
ಮಾತುಗಳನ್ನು ಆಡಿರುವೆ. ನನ್ನ ಒಡೆಯನಾದ
ಯೆಹೋವನೇ, ನರಪ್ರಾಣಿಯಾದ ನನ್ನೊಂದಿಗೆ ಇಂಥ
ಮಹತ್ತಾದ ಕಾರ್ಯ ಮಾಡಬಹುದೇ? [20]ನಾನು ನಿನಗೆ
ಇನ್ನೇನು ಹೇಳಲಿ? ನಿನ್ನ ಜೊತೆ ಹೇಗೆ ಮಾತನಾಡುತ್ತಲೇ
ಇರಲಿ? ನನ್ನ ಒಡೆಯನಾದ ಯೆಹೋವನೇ, ನಾನು ನಿನ್ನ
ಸೇವಕನೆಂಬುದು ನಿನಗೆ ತಿಳಿದಿದೆ. [21]ನೀನು ಈ ಕಾರ್ಯ
ವನ್ನು ನಿನ್ನ ವಾಗ್ದಾನದ ಪ್ರಕಾರವಾಗಿಯೂ ನಿನ್ನ ಚಿತ್ತದ
ಪ್ರಕಾರವಾಗಿಯೂ ಮಾಡಿರುವೆ. ಮತ್ತು ನಿನ್ನ ಸೇವಕನಿಗೆ
ಅದನ್ನು ತಿಳಿಸಿರುವೆ. [22]ದೇವರಾದ ಯೆಹೋವನೇ,
ನಾನು ಕೇಳಿದ ಪ್ರಕಾರ ನೀನೇ ದೊಡ್ಡವನು; ನಿನ್ನ
ಸಮಾನರು ಬೇರೆ ಯಾರೂ ಇಲ್ಲ; ನಿನ್ನ ಹೊರತು ಬೇರೆ
ದೇವರಿಲ್ಲ.

[23]‘‘ನಿನ್ನ ಜನರಾದ ಇಸ್ರೇಲರಂಥವರು ಈ ಲೋಕ
ದಲ್ಲಿ ಬೇರೆ ಯಾರೂ ಇಲ್ಲ. ಅವರು ವಿಶೇಷವಾದ
ಜನರು. ಅವರು ಗುಲಾಮರಾಗಿದ್ದರು. ಆದರೆ ಅವರನ್ನು
ಈಜಿಪ್ಟಿನಿಂದ ನೀನು ಹೊರತಂದು ಸ್ವತಂತ್ರರನ್ನಾಗಿ
ಮಾಡಿರುವೆ. ನೀನು ಅವರನ್ನು ನಿನ್ನ ಜನರನ್ನಾಗಿ ಮಾಡಿ
ಕೊಂಡೆ. ಇಸ್ರೇಲರಿಗಾಗಿ ನೀನು ಉತ್ತಮವಾದ ಮತ್ತು
ಮಹತ್ತಾದ ಕಾರ್ಯಗಳನ್ನು ಮಾಡಿದೆ. ನಿನ್ನ ದೇಶಕ್ಕಾಗಿ
ನೀನು ಮಹತ್ಕಾರ್ಯಗಳನ್ನು ಮಾಡಿದೆ. [24]ಇಸ್ರೇಲಿನ ಜನ
ರನ್ನು ಎಂದೆಂದಿಗೂ ನಿನ್ನ ಸ್ವಂತ ಜನರನ್ನಾಗಿ ಮಾಡಿ
ಕೊಂಡೆ. ಯೆಹೋವನೇ, ನೀನು ಅವರಿಗಾಗಿ ದೇವರಾದೆ.
[25]‘‘ದೇವರಾದ ಯೆಹೋವನೇ, ಈಗ ನೀನು ನನ್ನ ಬಗ್ಗೆ
ಮಾತನಾಡಿರುವೆ. ನಾನು ನಿನ್ನ ಸೇವಕ. ನೀನು ನನ್ನ
ಕುಲದ ಬಗ್ಗೆಯೂ ವಾಗ್ದಾನ ಮಾಡಿರುವೆ. ನಿನ್ನ ವಾಗ್ದಾನ
ಗಳನ್ನು ನೆರವೇರಿಸು. ನೀನು ವಾಗ್ದಾನ ಮಾಡಿದ ಕಾರ್ಯ
ಗಳನ್ನು ಮಾಡು. [26]ಆಗ ನಿನ್ನ ಹೆಸರು ಎಂದೆಂದೂ
ಗೌರವಿಸಲ್ಪಡುತ್ತದೆ. ಜನರೆಲ್ಲರೂ ‘ಸರ್ವಶಕ್ತನಾದ
ಯೆಹೋವನೇ ಇಸ್ರೇಲರ ದೇವರು!’ ಎಂದು ಹೇಳು
ವರು. ಅಲ್ಲದೆ ನಿನ್ನ ಸೇವಕನಾದ ದಾವೀದನ ಕುಟುಂಬವು
ನಿನ್ನ ಸನಿಧಿಯಲ್ಲಿ ಸ್ಥಿರವಾಗುವುದು.’’ ಎಂದು
ಹೇಳುವರು.
[27]‘‘ಇಸ್ರೇಲರ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನೇ, ನೀನು ನನಗೆ ಮುಂದಿನ ಸಂಗತಿಗಳನ್ನು
ತೋರಿಸಿರುವೆ. ‘ನಾನು ನಿನ್ನ ಕುಟುಂಬವನ್ನು ಸ್ಥಿರಪಡಿಸು
ವೆನು, ಎಂದು ಹೇಳಿರುವೆ. ಆ ಕಾರಣದಿಂದಲೇ ನಿನ್ನ
ಸೇವಕನಾದ ನಾನು ನಿನ್ನಲ್ಲಿ ಈ ಪ್ರಾರ್ಥನೆಯನ್ನು ಸಲ್ಲಿ
ಸಲು ತೀರ್ಮಾನಿಸಿದ್ದೇನೆ. [28]ನನ್ನ ಒಡೆಯನಾದ
ಯೆಹೋವನೇ, ನೀನೇ ದೇವರು. ನಿನ್ನ ಮಾತುಗಳು ಸತ್ಯ
ವಾದವು. ನಿನ್ನ ಸೇವಕನಾದ ನನಗೆ ಅತೀ ಉತ್ತಮವಾದ
ವಾಗ್ದಾನಗಳನ್ನು ಮಾಡಿರುವೆ. [29]ದಯವಿಟ್ಟು ನನ್ನ
ಕುಟುಂಬವನ್ನು ಆಶೀರ್ವದಿಸು. ಅದು ನಿನ್ನ ಸನ್ನಿಧಿಯಲ್ಲಿ
ಎಂದೆಂದಿಗೂ ಮುಂದುವರಿಯಲಿ. ದೇವರಾದ
ಯೆಹೋವನೇ, ಆಶ್ಚರ್ಯಕರವಾದ ವಾಗ್ದಾನಗಳನ್ನು
ನೀನು ನನಗೆ ಮಾಡಿರುವೆ. ನಿನ್ನ ಆಶೀರ್ವಾದದಿಂದ ನನ್ನ
ಕುಟುಂಬವು ಎಂದೆಂದಿಗೂ ಆಶೀರ್ವಾದವನ್ನು
ಹೊಂದಲಿ’’ ಎಂದು ಪ್ರಾರ್ಥಿಸಿದನು.

## ದಾವೀದನು ಯುದ್ಧಗಳಲ್ಲಿ ಜಯಗಳಿಸಿದ್ದು

8 ತರುವಾಯ, ದಾವೀದನು ಫಿಲಿಷ್ಟಿಯರನ್ನು
ಸೋಲಿಸಿ ಬಹು ವಿಸ್ತಾರವಾದ ಪ್ರದೇಶವನ್ನು
ಹತೋಟಿಯಲ್ಲಿಟ್ಟುಕೊಂಡಿದ್ದ ಅವರ ರಾಜಧಾನಿ
ಯನ್ನು ಸ್ವಾಧೀನಪಡಿಸಿಕೊಂಡನು. [2]ಮೋವಾಬಿನ ಜನ
ರನ್ನು ಸಹ ದಾವೀದನು ಸೋಲಿಸಿದನು. ಅವರನ್ನು ನೆಲದ
ಮೇಲೆ ಬಲವಂತದಿಂದ ಮಲಗಿಸಿ ಹಗ್ಗದಿಂದ ಅವರನ್ನು

ಸಾಲುಸಾಲಾಗಿ ವಿಂಗಡಿಸಿದನು. ಎರಡು ಸಾಲಿನ ಗಂಡಸ
ರನ್ನು ಕೊಲ್ಲಿಸಿದನು; ಆದರೆ ಮೂರನೆಯ ಸಾಲಿನ ಗಂಡಸ
ರನ್ನು ಜೀವಂತವಾಗಿ ಉಳಿಸಿದನು. ಮೋವಾಬಿನ ಜನರು
ದಾವೀದನ ಸೇವಕರಾದರು. ಅವರು ಅವನಿಗೆ ಕಾಣಿಕೆ
ಗಳನ್ನು ಅರ್ಪಿಸಿದರು.
3ಹದದೆಜೆರನು ರೆಹೋಬನ ಮಗ ಹಾಗೂ ಚೋಬದ
ರಾಜ. ದಾವೀದನು ಯೂಫ್ರೇಟೀಸ್ ನದಿಯ ಸುತ್ತಲಿನ
ಪ್ರದೇಶವನ್ನು ತನ್ನ ಸ್ವಾಧೀನಕ್ಕೆ ತೆಗೆದುಕೊಳ್ಳಲು ಪ್ರಯತ್ನಿ
ಸುತ್ತಿದ್ದಾಗ, ಹದದೆಜೆರನನ್ನು ಸೋಲಿಸಿದನು.
4ಹದದೆಜೆರನಿಂದ ಒಂದು ಸಾವಿರದ ಏಳುನೂರು ಅಶ್ವ
ಪಡೆಯನ್ನು ದಾವೀದನು ತೆಗೆದುಕೊಂಡನು. ಅವನು
ಇಪ್ಪತ್ತು ಸಾವಿರ ಕಾಲಾಳು ಸೈನಿಕರನ್ನು ಸಹ ಪಡೆದನು.
ದಾವೀದನು ನೂರು ರಥದ ಕುದುರೆಗಳನ್ನು ಇಟ್ಟು
ಕೊಂಡು ಉಳಿದವುಗಳನ್ನು ಕುಂಟುವಂತೆ ಮಾಡಿದನು.
5ಚೋಬದ ರಾಜನಾದ ಹದದೆಜೆರನ ಸಹಾಯಕ್ಕೆ
ದಮಸ್ಕದ ಅರಾಮ್ಯರು ಬಂದರು. ಆದರೆ ದಾವೀದನು
ಆ ಇಪ್ಪತ್ತೆರಡು ಸಾವಿರ ಅರಾಮ್ಯರನ್ನು ಸಂಹರಿಸಿದನು.
6ಬಳಿಕ ದಾವೀದನು ದಮಸ್ಕದ ಅರಾಮ್ ದೇಶದಲ್ಲಿ
ಕಾವಲುದಂಡನ್ನು ಇರಿಸಿದನು. ಅರಾಮ್ಯರು ದಾವೀದನ
ಸೇವಕರಾದರು ಮತ್ತು ಅವನಿಗೆ ಕಾಣಿಕೆಗಳನ್ನು ತಂದರು.
ದಾವೀದನು ಹೋದ ಸ್ಥಳಗಳಲ್ಲೆಲ್ಲ ಯೆಹೋವನು
ವಿಜಯವನ್ನು ಉಂಟುಮಾಡಿದನು.
7ಹದದೆಜೆರನ ಸೇವಕರಿಗೆ ಸೇರಿದ ಚಿನ್ನದ ಗುರಾಣಿ
ಗಳನ್ನು ದಾವೀದನು ವಶಪಡಿಸಿಕೊಂಡನು. ದಾವೀದನು
ಅವುಗಳನ್ನು ಜೆರುಸಲೇಮಿಗೆ ತಂದನು. 8ಬೆಟಹ ಮತ್ತು
ಬೇರೋತೈಗಳಿಂದ ಹಿತ್ತಾಳೆಯ ಅನೇಕಾನೇಕ ವಸ್ತು
ಗಳನ್ನು ದಾವೀದನು ವಶಪಡಿಸಿಕೊಂಡನು. (ಬೆಟಹ
ಮತ್ತು ಬೇರೋತೈಗಳು ಹದದೆಜೆರನಿಗೆ ಸೇರಿದ
ನಗರಗಳು.)
9ಹದದೆಜೆರನ ಸೈನ್ಯವನ್ನೆಲ್ಲ ದಾವೀದನು ಸೋಲಿಸಿದ
ನೆಂಬ ವರ್ತಮಾನವು ಹಮಾತಿನ ರಾಜನಾದ ತೋವಿಗೆ
ತಿಳಿಯಿತು. 10ಆಗ ತೋವಿಯು ತನ್ನ ಮಗನಾದ
ಯೋರಾಮನನ್ನು ರಾಜನಾದ ದಾವೀದನ ಬಳಿಗೆ ಕಳು
ಹಿಸಿದನು. ದಾವೀದನು ಹದದೆಜೆರನ ವಿರುದ್ಧ
ಹೋರಾಡಿ ಅವನನ್ನು ಸೋಲಿಸಿದ್ದಕ್ಕಾಗಿ ಯೋರಾಮನು
ದಾವೀದನನ್ನು ಅಭಿನಂದಿಸಿದನು ಮತ್ತು ಆಶೀರ್ವದಿಸಿ
ದನು. (ಈ ಮೊದಲು ಹದದೆಜೆರನು ತೋವಿಗೆ ವಿರುದ್ಧ
ವಾಗಿ ಯುದ್ಧವನ್ನು ಮಾಡಿದನು.) ಯೋರಾಮನು ಚಿನ್ನ,
ಬೆಳ್ಳಿ ಮತ್ತು ಹಿತ್ತಾಳೆಯಿಂದ ಮಾಡಿದ ವಸ್ತುಗಳನ್ನು ತಂದಿ
ದ್ದನು. 11ದಾವೀದನು ಆ ವಸ್ತುಗಳನ್ನು ತೆಗೆದುಕೊಂಡು
ಯೆಹೋವನಿಗೆ ಸಮರ್ಪಿಸಿದನು. ಅವನು ಅನ್ಯದೇಶ
ಗಳನ್ನು ಸೋಲಿಸಿದ್ದಾಗ ಯೆಹೋವನಿಗೆ ಸಮರ್ಪಿಸಿದ್ದ
ಬೆಳ್ಳಿ ಮತ್ತು ಚಿನ್ನಗಳೊಂದಿಗೆ ಇವುಗಳನ್ನೂ ಸೇರಿಸಿದನು.
12ಆತನು ಸೋಲಿಸಿದ ದೇಶಗಳು ಯಾವುವೆಂದರೆ:
ಅರಾಮ್, ಮೋವಾಬ್, ಅಮ್ಮೋನಿಯ, ಫಿಲಿಷ್ಟಿಯ
ಮತ್ತು ಅಮಾಲೇಕ್ಯ. ಚೋಬದ ರಾಜನಾದ ರೆಹೋಬನ
ಮಗ ಹದದೆಜೆರನನ್ನು ಸಹ ದಾವೀದನು ಸೋಲಿಸಿದನು.
13ದಾವೀದನು ಉಪ್ಪಿನ ಕಣಿವೆಯಲ್ಲಿ ಹದಿನೆಂಟು ಸಾವಿರ
ಅರಾಮ್ಯರನ್ನು ಸೋಲಿಸಿದನು. ಅವನು ಮನೆಗೆ ಹಿಂದಿರು
ಗುವಷ್ಟರಲ್ಲಿ ಪ್ರಸಿದ್ಧನಾಗಿದ್ದನು. 14ದಾವೀದನು
ಎದೋಮಿನ ಎಲ್ಲ ಕಡೆಯಲ್ಲೂ ಕಾವಲುದಂಡನ್ನು
ಇರಿಸಿದನು. ಎದೋಮಿನ ಜನರೆಲ್ಲರೂ ದಾವೀದನ
ಸೇವಕರಾದರು. ದಾವೀದನು ಹೋದಕಡೆಗಳಲ್ಲೆಲ್ಲಾ
ಯೆಹೋವನು ವಿಜಯವನ್ನು ಉಂಟು ಮಾಡಿದನು.

### ದಾವೀದನ ರಾಜ್ಯಾಡಳಿತ

15ದಾವೀದನು ಸಮಸ್ತ ಇಸ್ರೇಲರನ್ನು ಆಳಿದನು.
ದಾವೀದನು ಜನರಿಗೆ ನ್ಯಾಯವಾದ ಮತ್ತು ಸರಿಯಾದ
ತೀರ್ಪುಗಳನ್ನು ಕೊಡುತ್ತಿದ್ದನು. 16ಚೆರೂಯಳ ಮಗ
ನಾದ ಯೋವಾಬನು ಅವನ ಸೈನ್ಯದ ಅಧಿಕಾರಿಯಾಗಿ
ದ್ದನು. ಅಹೀಲೂದನ ಮಗನಾದ ಯೆಹೋಷಾಫಾಟನು
ಇತಿಹಾಸಕಾರನಾಗಿದ್ದನು. 17ಅಹೀಟೂಬನ ಮಗನಾದ
ಚಾದೋಕನೂ ಎಬ್ಯಾತಾರನ ಮಗನಾದ ಅಹೀಮೆಲೆ
ಕನೂ ಯಾಜಕರಾಗಿದ್ದರು. ಸೆರಾಯನು ಕಾರ್ಯದರ್ಶಿ
ಯಾಗಿದ್ದನು. 18ಯೆಹೋಯಾದಾವನ ಮಗ
ಬೆನಾಯನು ಕೆರೇತ್ಯರು ಮತ್ತು ಪೆಲೇತ್ಯರು* ಎಂಬ
ಕಾವಲುದಂಡುಗಳ ಅಧಿಪತಿಯಾಗಿದ್ದನು. ದಾವೀದನ
ಮಕ್ಕಳೆಲ್ಲರೂ ಅಧಿಕಾರಿಗಳಾಗಿದ್ದರು.

### ಸೌಲನ ಕುಟುಂಬಕ್ಕೆ ದಾವೀದನು ತೋರಿದ ಅನುಕಂಪ

9 ದಾವೀದನು, ''ಸೌಲನ ಕುಟುಂಬದಲ್ಲಿ ಇನ್ನೂ
ಯಾರಾದರೂಉಳಿದಿರುವರೇ? ಯೋನಾತಾನನಿ
ಗೋಸ್ಕರ ನಾನು ಆ ವ್ಯಕ್ತಿಗೆ ದಯೆ ತೋರಿಸ
ಬೇಕಾಗಿದೆ''ಎಂದು ಕೇಳಿದನು.
2ಸೌಲನ ಮನೆಯಲ್ಲಿ ಸೇವಕನಾಗಿದ್ದ ಚೀಬ ಎಂಬವ
ನೊಬ್ಬನಿದ್ದನು. ದಾವೀದನ ಸೇವಕರು ಚೀಬನನ್ನು
ದಾವೀದನ ಬಳಿಗೆ ಕರೆತಂದರು. ರಾಜನಾದ ದಾವೀದನು
ಅವನಿಗೆ,''ನೀನು ಚೀಬನೇ?''ಎಂದು ಕೇಳಿದನು.
ಚೀಬನು, ''ಹೌದು, ನಿನ್ನ ಸೇವಕನಾದ ಚೀಬನು
ನಾನೇ''ಎಂದನು.
3ರಾಜನಾದ ದಾವೀದನು, ''ಸೌಲನ ಕುಟುಂಬದಲ್ಲಿ
ಯಾವ ವ್ಯಕ್ತಿಯಾದರೂ ಉಳಿದಿರುವನೇ? ನಾನು ಆ

**ಕೆರೇತ್ಯ ಮತ್ತು ಪೆಲೇತ್ಯರು** ದಾವೀದನ ವಿಶೇಷ ಅಂಗರಕ್ಷಕ ಪಡೆ. ಪುರಾತನ ಅರಾಮಿಕ್ ಅನುವಾದದ ರೀತಿ''ಬಿಲ್ಲುಗಾರರು ಮತ್ತು ಕಲ್ಲೆಸೆತದಲ್ಲಿ ನಿಪುಣರು''ಎಂದು.

ವ್ಯಕ್ತಿಗೆ ದೇವರ ಕರುಣೆಯನ್ನು ತೋರಿಸಬೇಕಾಗಿದೆ'' ಎಂದು ಹೇಳಿದನು. ಚೀಬನು ರಾಜನಾದ ದಾವೀದನಿಗೆ ''ಯೋನಾತಾನನ ಮಗನೊಬ್ಬನು ಇನ್ನೂ ಇದ್ದಾನೆ. ಅವನ ಎರಡೂ ಕಾಲುಗಳು ಕುಂಟಾಗಿವೆ'' ಎಂದನು.

4ರಾಜನಾದ ದಾವೀದನು ಚೀಬನಿಗೆ, ''ಅವನು ಎಲ್ಲಿದ್ದಾನೆ?''ಎಂದು ಕೇಳಿದನು.

ಚೀಬನು ರಾಜನಿಗೆ, ''ಅವನು ಲೋದೆಬಾರಿನಲ್ಲಿರುವ ಅಮ್ಮೀಯೇಲನ ಮಗನಾದ ಮಾಕೀರನ ಮನೆ ಯಲ್ಲಿದ್ದಾನೆ''ಎಂದನು.

5ಆಗ ರಾಜನಾದ ದಾವೀದನು ಲೋದೆಬಾರಿನಲ್ಲಿ ಅಮ್ಮೀಯೇಲನ ಮಗನಾದ ಮಾಕೀರನ ಮನೆಯಿಂದ ಯೋನಾತಾನನ ಮಗನನ್ನು ಕರೆತರಲು ಸೇವಕರನ್ನು ಕಳು ಹಿಸಿದನು. 6ಯೋನಾತಾನನ ಮಗನಾದ ಮೆಫೀಬೋಶೆ ತನು ದಾವೀದನ ಬಳಿಗೆ ಬಂದು ಸಾಷ್ಟಾಂಗ ನಮಸ್ಕಾರ ಮಾಡಿದನು.

ದಾವೀದನು, ''ಮೆಫೀಬೋಶೆತನೇ'' ಎಂದನು.

ಮೆಫೀಬೋಶೆತನು, ''ನಿಮ್ಮ ಸೇವಕನಾದ ನಾನು ಇಲ್ಲಿದ್ದೇನೆ''ಎಂದನು.

7ದಾವೀದನು ಮೆಫೀಬೋಶೆತನಿಗೆ, ''ಹೆದರಬೇಡ, ನಾನು ನಿನಗೆ ದಯೆ ತೋರಿಸುವೆ. ನಿನ್ನ ತಂದೆಯಾದ ಯೋನಾತಾನನ ಸಲುವಾಗಿ ನಾನು ಇದನ್ನು ಮಾಡು ತ್ತೇನೆ. ನಿನ್ನ ಅಜ್ಜನಾದ ಸೌಲನ ಭೂಮಿಯನ್ನೆಲ್ಲಾ ನಾನು ನಿನಗೆ ಹಿಂದಕ್ಕೆ ಕೊಡುತ್ತೇನೆ. ನೀನು ಯಾವಾಗಲೂ ನನ್ನ ಪಂಕ್ತಿಯಲ್ಲಿ ಊಟಮಾಡಬೇಕು'' ಎಂದು ಹೇಳಿದನು.

8ಮೆಫೀಬೋಶೆತನು ದಾವೀದನಿಗೆ ಮತ್ತೆ ಸಾಷ್ಟಾಂಗ ನಮಸ್ಕಾರಮಾಡಿ, ''ನೀನು ನಿನ್ನ ಸೇವಕನಾದ ನನಗೆ ಬಹಳ ದಯಾಪರನಾಗಿರುವೆ, ನಾನು ಸತ್ತ ನಾಯಿಗಿಂತ ಉತ್ತಮನೇನಲ್ಲ!''ಎಂದು ಹೇಳಿದನು.

9ಆಗ ರಾಜನಾದ ದಾವೀದನು ಸೌಲನ ಸೇವಕನಾದ ಚೀಬನನ್ನು ಕರೆದು, ''ನಿನ್ನ ಒಡೆಯನಾದ ಸೌಲನ ಕುಟುಂಬಕ್ಕೆ ಸೇರಿದ ಎಲ್ಲವನ್ನೂ ಅವನ ಮೊಮ್ಮಗನಿಗೆ
ಕೊಟ್ಟಿದ್ದೇನೆ. 10ನೀನು ಮೆಫೀಬೋಶೆತನಿಗಾಗಿ ಭೂಮಿ
ಯಲ್ಲಿ ವ್ಯವಸಾಯ ಮಾಡು. ನಿನ್ನ ಮಕ್ಕಳೂ ನಿನ್ನ ಸೇವ ಕರೂ ಮೆಫೀಬೋಶೆತನಿಗಾಗಿ ಇದನ್ನು ಮಾಡಲಿ. ನೀನು ಬೆಳೆಗಳನ್ನು ಕೊಯ್ದು ಸುಗ್ಗಿಮಾಡು. ಆಗ ನಿನ್ನ ಒಡೆಯನ ಮೊಮ್ಮಗನಿಗೆ ಬೇಕಾದಷ್ಟು ಆಹಾರವಿರುತ್ತದೆ. ಆದರೆ ನಿನ್ನ ಒಡೆಯನ ಮೊಮ್ಮಗನಾದ ಮೆಫೀಬೋಶೆತನು ಯಾವಾಗಲೂ ನನ್ನ ಪಂಕ್ತಿಯಲ್ಲಿ ಊಟಮಾಡಬೇಕು'' ಎಂದನು. ಚೀಬನಿಗೆ ಹದಿನೈದು ಮಂದಿ ಗಂಡು ಮಕ್ಕಳೂ
ಇಪ್ಪತ್ತು ಮಂದಿ ಸೇವಕರೂ ಇದ್ದರು. 11ಚೀಬನು
ರಾಜನಾದ ದಾವೀದನಿಗೆ, ''ನಾನು ನಿಮ್ಮ ಸೇವಕ. ರಾಜನಾದ ಒಡೆ ಯನು ನನಗೆ ಆಜ್ಞಾಪಿಸಿದ್ದೆಲ್ಲವನ್ನೂ ನಾನು ಮಾಡುತ್ತೇನೆ'' ಎಂದನು.

ಆದ್ದರಿಂದ ಮೆಫೀಬೋಶೆತನು, ರಾಜನ ಗಂಡುಮಕ್ಕ ಳಲ್ಲಿ ಒಬ್ಬನಂತೆ, ದಾವೀದನ ಪಂಕ್ತಿಯಲ್ಲಿ ಊಟ
ಮಾಡುತ್ತಿದ್ದನು. 12ಮೆಫೀಬೋಶೆತನಿಗೆ ಮೀಕನೆಂಬ
ಚಿಕ್ಕಮಗನಿದ್ದನು. ಚೀಬನ ಕುಟುಂಬದ ಜನರೆಲ್ಲರೂ
ಮೆಫೀಬೋಶೆತನ ಸೇವಕರಾದರು. 13ಮೆಫೀಬೋಶೆತನ
ಎರಡೂ ಕಾಲುಗಳು ಕುಂಟಾಗಿದ್ದವು. ಮೆಫೀಬೋಶೆ ತನು ಜೆರುಸಲೇಮಿನಲ್ಲಿ ನೆಲೆಸಿದ್ದನು. ಅವನು ಪ್ರತಿ ದಿನವೂ ರಾಜನ ಪಂಕ್ತಿಯಲ್ಲಿ ಊಟಮಾಡುತ್ತಿದ್ದನು.

### ದಾವೀದನ ಜನರಿಗೆ ಹಾನೂನನು ಅವಮಾನಮಾಡಿದ್ದು

10 ತರುವಾಯ, ಅಮ್ಮೋನಿಯರ ರಾಜನಾದ ನಾಹಾಷನು ಸತ್ತನು, ಅವನ ನಂತರ ಅವನ ಮಗ
ನಾದ ಹಾನೂನನು ರಾಜನಾದನು. 2ದಾವೀದನು,
''ನಾಹಾಷನು ನನಗೆ ದಯೆತೋರಿಸಿದ್ದನು. ಆದ್ದರಿಂದ ಅವನ ಮಗನಿಗೆ ನಾನು ದಯೆತೋರಿಸುವೆನು'' ಎಂದು ಹೇಳಿದನು. ಆದ್ದರಿಂದ ತಂದೆಯ ಸಾವಿನಿಂದ ಶೋಕತಪ್ತ ನಾಗಿರುವ ಹಾನೂನನನ್ನು ಸಂತೈಸಲು ದಾವೀದನು ತನ್ನ ಅಧಿಕಾರಿಗಳನ್ನು ಕಳುಹಿಸಿದನು.

ದಾವೀದನ ಸೇವಕರು ಅಮ್ಮೋನಿಯರ ದೇಶಕ್ಕೆ
ಹೋದರು. 3ಆದರೆ ಅಮ್ಮೋನಿಯರ ನಾಯಕರು ತಮ್ಮ
ಪ್ರಭುವಾದ ಹಾನೂನನಿಗೆ, ''ನಿನ್ನನ್ನು ಸಂತೈಸಲು ಕೆಲವು ಜನರನ್ನು ಕಳುಹಿಸುವುದರ ಮೂಲಕ ದಾವೀದನು ನಿನ್ನ ತಂದೆಯನ್ನು ಗೌರವಿಸಲು ಪ್ರಯತ್ನಿಸುತ್ತಿರುವನೆಂದು ನೀನು ಭಾವಿಸಿರುತ್ತಿಯಲ್ಲವೇ? ಇಲ್ಲ! ನಿನ್ನ ನಗರದ ಸಂಗತಿಗಳನ್ನು ರಹಸ್ಯವಾಗಿ ಕಂಡುಕೊಳ್ಳಲು ಮತ್ತು ತಿಳಿದುಕೊಳ್ಳಲು ದಾವೀದನು ಈ ಜನರನ್ನು ಕಳುಹಿಸಿ ದ್ದಾನೆ. ಅವರು ನಿನ್ನ ವಿರುದ್ಧವಾಗಿ ಯುದ್ಧಮಾಡಲು ಯೋಜನೆ ಮಾಡುತ್ತಿದ್ದಾರೆ''ಎಂದು ಹೇಳಿದರು.

4ಆದ್ದರಿಂದ ಹಾನೂನನು ದಾವೀದನ ಸೇವಕರನ್ನು ಹಿಡಿಸಿ ಅವರ ಗಡ್ಡದ ಅರ್ಧಭಾಗವನ್ನು ಬೋಳಿಸಿದನು. ಅವರ ನಡುವಿನ ಕೆಳಭಾಗವು ಕಾಣುವಂತೆ ಅವರ ಬಟ್ಟೆ ಗಳನ್ನು ಮಧ್ಯಭಾಗದಲ್ಲಿ ಕತ್ತರಿಸಿದನು. ನಂತರ ಅವರನ್ನು ಕಳುಹಿಸಿದನು.

5ಅವರು ದಾವೀದನಿಗೆ ಈ ಸುದ್ದಿಯನ್ನು ತಿಳಿಸಿದರು. ಆಗ ದಾವೀದನು ತನ್ನ ಬಳಿಗೆ ಬರಲು ಬಹಳ ನಾಚಿಕೆ ಯಿಂದಿದ್ದ ಅಧಿಕಾರಿಗಳ ಬಳಿಗೆ ಸಂದೇಶಕರನ್ನು ಕಳುಹಿಸಿ, ''ನಿಮ್ಮ ಗಡ್ಡಗಳು ಮತ್ತೆ ಬೆಳೆಯುವವರೆಗೆ ಜೆರಿಕೋವಿನಲ್ಲಿ ಇರಿ. ಅನಂತರ ಜೆರುಸಲೇಮಿಗೆ ಬನ್ನಿ''ಎಂದು ತಿಳಿಸಿದನು.

### ಅಮ್ಮೋನಿಯರ ವಿರುದ್ಧ ಯುದ್ಧ

6ಅಮ್ಮೋನಿಯರು ತಾವು ದಾವೀದನಿಗೆ ಶತ್ರುಗಳಾಗಿ ರುವುದಾಗಿ ತಿಳಿದು ಕೊಂಡರು. ಆದ್ದರಿಂದ

ಅಮ್ಮೋನಿಯರು ಹಣಕೊಟ್ಟು ಬೇತ್‌ರೆಹೋಬ್ ಮತ್ತು
ಚೋಬಾಗಳಿಂದ ಅರಾಮ್ಯರ ಇಪ್ಪತ್ತುಸಾವಿರ ಮಂದಿ
ಭೂದಳವನ್ನು ಬರಮಾಡಿಕೊಂಡರು. ಅಮ್ಮೋನಿಯರು
ಮಾಕಾದ ರಾಜನನ್ನು ಮತ್ತು ಅವನ ಒಂದು ಸಾವಿರ ಸೈನಿ
ಕರನ್ನು ಹಾಗೂ ಟೋಬ್‌ನಿಂದ ಹನ್ನೆರಡು ಸಾವಿರ
ಮಂದಿ ಸೈನಿಕರನ್ನು ಬರಮಾಡಿಕೊಂಡರು.

[7]ಇದು ದಾವೀದನಿಗೆ ತಿಳಿಯಿತು. ಆದ್ದರಿಂದ ಅವನು
ಯೋವಾಬನನ್ನು ಎಲ್ಲಾ ಶೂರ ಸೈನಿಕರೊಂದಿಗೆ ಕಳು
ಹಿಸಿದನು. [8]ಅಮ್ಮೋನಿಯರು ಹೊರಗೆ ಬಂದು ಯುದ್ಧಕ್ಕೆ
ಸಿದ್ಧರಾದರು. ಅವರು ನಗರದ ಬಾಗಿಲಿನಲ್ಲಿ ನಿಂತರು.
ಚೋಬಾ ಮತ್ತ ರೆಹೋಬ್‌ಗಳ ಅರಾಮ್ಯರು, ಟೋಬ್
ಮತ್ತು ಮಾಕಾದ ಜನರು ಯುದ್ಧರಂಗದಲ್ಲಿ ಅಮ್ಮೋನಿ
ಯರ ಜೊತೆಯಲ್ಲಿ ಒಟ್ಟಾಗಿ ನಿಲ್ಲಲಿಲ್ಲ.

[9]ಅಮ್ಮೋನಿಯರು ತಮ್ಮ ವಿರುದ್ಧವಾಗಿ ಹಿಂದೆ ಮತ್ತು
ಮುಂದೆ ನಿಂತಿರುವುದನ್ನು ನೋಡಿದ ಯೋವಾಬನು
ಇಸ್ರೇಲರಲ್ಲಿ ಶ್ರೇಷ್ಠರಾದವರನ್ನು ಆರಿಸಿಕೊಂಡು
ಅರಾಮ್ಯರ ವಿರುದ್ಧ ಯುದ್ಧಮಾಡಲು ಅವರನ್ನು
ಸಾಲಾಗಿ ನಿಲ್ಲಿಸಿದನು. [10]ಬಳಿಕ ಯೋವಾಬನು ಉಳಿದ
ಜನರನ್ನು ತನ್ನ ತಮ್ಮನಾದ ಅಬೀಷೈಯ ವಶಕ್ಕೆ ಕೊಟ್ಟು
ಅಮ್ಮೋನಿಯರ ವಿರುದ್ಧ ಹೋರಾಡಲು ಕಳುಹಿಸಿದನು.
[11]ಯೋವಾಬನು ಅಬೀಷೈಗೆ, ‘‘ಅರಾಮ್ಯರು ನನಗಿಂತ
ಬಲಶಾಲಿಗಳೆಂದು ಕಂಡು ಬಂದರೆ ನೀನು ನನಗೆ
ಸಹಾಯ ಮಾಡು. ಅಮ್ಮೋನಿಯರು ನಿನಗೆ ಬಲಶಾಲಿಗ
ಳೆಂದು ಕಂಡು ಬಂದರೆ ನಾನು ನಿನ್ನ ಸಹಾಯಕ್ಕೆ
ಬರುತ್ತೇನೆ. [12]ನೀನು ಶಕ್ತನಾಗಿರು. ನಮ್ಮ ಜನರಿಗಾಗಿ
ಮತ್ತು ನಮ್ಮ ದೇವರ ನಗರಗಳಿಗಾಗಿ ಧೈರ್ಯದಿಂದ
ಹೋರಾಡೋಣ. ಯೆಹೋವನು ತನಗೆ ಸರಿಯೆನಿಸು
ವುದನ್ನು ಮಾಡಲಿ’’ ಎಂದು ಹೇಳಿದನು.

[13]ನಂತರ ಯೋವಾಬನು ಮತ್ತು ಅವನ ಜನರು
ಅರಾಮ್ಯರ ಮೇಲೆ ಆಕ್ರಮಣ ಮಾಡಿದರು. ಯೋವಾಬ
ಮತ್ತು ಅವನ ಜನರನ್ನು ಬಿಟ್ಟು ಅರಾಮ್ಯರು ಓಡಿ
ಹೋದರು. [14]ಅರಾಮ್ಯರು ಓಡಿ ಹೋಗುತ್ತಿರುವುದನ್ನು
ನೋಡಿದ ಅಮ್ಮೋನಿಯರು ಅಬೀಷೈಯನ್ನು ಬಿಟ್ಟು ಓಡಿ
ಹೋದರು. ಅವರು ತಮ್ಮ ನಗರಕ್ಕೆ ಹಿಂದಿರುಗಿದರು.

ಯೋವಾಬನು ಯುದ್ಧರಂಗದಿಂದ ಹಿಂದಿರುಗಿ
ಜೆರುಸಲೇಮಿಗೆ ಬಂದನು.

### ಅರಾಮ್ಯರು ಮತ್ತೆ ಯುದ್ಧ ಮಾಡಲು ತೀರ್ಮಾನಿಸಿದರು

[15]ಇಸ್ರೇಲರು ತಮ್ಮನ್ನು ಸೋಲಿಸಿದರೆಂಬುದನ್ನು
ಅರಾಮ್ಯರು ತಿಳಿದುಕೊಂಡರು. ಆದ್ದರಿಂದ ಅವರೆಲ್ಲರೂ
ಒಟ್ಟಾಗಿ ಸೇರಿ ಒಂದು ದೊಡ್ಡ ಸೈನ್ಯವನ್ನು ಕಟ್ಟಿದರು.
[16]ಯೂಫ್ರೇಟೀಸ್ ನದಿಯ ಮತ್ತೊಂದು ತೀರದಲ್ಲಿ
ವಾಸಿಸುತ್ತಿದ್ದ ಅರಾಮ್ಯರನ್ನು ಕರೆತರಲು ಹದದೆಜೆರನು
ಸಂದೇಶಕರನ್ನು ಕಳುಹಿಸಿದನು. ಈ ಅರಾಮ್ಯರು
ಹೇಲಾಮಿಗೆ ಬಂದರು. ಹದದೆಜೆರನ ಸೇನಾಪತಿಯಾದ
ಶೋಬಕನು ಅವರ ನಾಯಕನಾದನು.

[17]ಈ ವಿಷಯವು ದಾವೀದನಿಗೆ ತಿಳಿಯಿತು. ಆದ್ದರಿಂದ
ಅವನು ಇಸ್ರೇಲರೆಲ್ಲರನ್ನೂ ಒಟ್ಟುಗೂಡಿಸಿ ಜೋರ್ಡನ್
ನದಿಯನ್ನು ದಾಟಿ ಹೇಲಾಮಿಗೆ ಹೋದನು.

ಅಲ್ಲಿ ಅರಾಮ್ಯರು ಯುದ್ಧಕ್ಕೆ ಸಿದ್ದರಾಗಿ ಆಕ್ರಮಣ
ಮಾಡಿದರು. [18]ಆದರೆ ದಾವೀದನು ಅರಾಮ್ಯರನ್ನು
ಸೋಲಿಸಿದನು. ಅರಾಮ್ಯರು ಇಸ್ರೇಲರನ್ನು ಬಿಟ್ಟು ಓಡಿ
ಹೋದರು. ದಾವೀದನು ಅನೇಕ ಅರಾಮ್ಯರನ್ನೂ ಏಳು
ನೂರು ಮಂದಿ ರಥದ ಸಾರಥಿಯರನ್ನೂ ನಲವತ್ತು
ಸಾವಿರ ಮಂದಿ ರಾಹುತರನ್ನೂ ಕೊಂದುಹಾಕಿದನು.
ಅರಾಮ್ಯರ ಸೇನಾಪತಿಯಾದ ಶೋಬಕನನ್ನು ಸಹ
ದಾವೀದನು ಕೊಂದುಹಾಕಿದನು.

[19]ಹದದೆಜೆರನ ಸೇವೆಯಲ್ಲಿದ್ದ ರಾಜರಿಗೆ ಇಸ್ರೇಲರು
ತಮ್ಮನ್ನು ಸೋಲಿಸಿದುದು ತಿಳಿದುಬಂತು. ಆದುದರಿಂದ
ಅವರು ಇಸ್ರೇಲರೊಂದಿಗೆ ಶಾಂತಿಸಂಧಾನ ಮಾಡಿ
ಕೊಂಡು ಅವರ ಸೇವೆಮಾಡಿದರು. ಅಮ್ಮೋನಿಯರಿಗೆ
ಮತ್ತೆ ಸಹಾಯಮಾಡಲು ಅರಾಮ್ಯರು ಭಯ
ಗೊಂಡರು.

### ದಾವೀದನು ಬತ್ಷೆಬೆಳೊಂದಿಗೆ ಪಾಪ ಮಾಡಿದ್ದು

11 ವಸಂತಕಾಲದಲ್ಲಿ, ಎಲ್ಲ ರಾಜರೂ ಯುದ್ಧಕ್ಕೆ
ಹೊರಡುವ ಸಮಯ ಬಂದಾಗ, ದಾವೀದನು
ಯೋವಾಬನನ್ನೂ ಅವನ ಸೇವಕರನ್ನೂ ಮತ್ತು ಇಸ್ರೇಲರೆ
ಲ್ಲರನ್ನೂ ಅಮ್ಮೋನಿಯರೊಂದಿಗೆ ಯುದ್ಧಮಾಡಲು
ಕಳುಹಿಸಿದನು. ಯೋವಾಬನ ಸೈನ್ಯವು ರಬ್ಬಕ್ಕೆ* ಮುತ್ತಿಗೆ
ಹಾಕಿತು.

ಆದರೆ ದಾವೀದನು ಜೆರುಸಲೇಮಿನಲ್ಲಿಯೇ ಉಳಿದು
ಕೊಂಡನು. [2]ಅವನು ಸಾಯಂಕಾಲ ತನ್ನ ಹಾಸಿಗೆಯಿಂದ
ಮೇಲೆದ್ದು ಅರಮನೆಯ ಮಾಳಿಗೆಯ ಮೇಲಕ್ಕೆ ಹೋಗಿ
ತಿರುಗಾಡುತ್ತಿದ್ದನು. ದಾವೀದನು ಮಾಳಿಗೆಯ ಮೇಲಿರು
ವಾಗ, ಒಬ್ಬ ಹೆಂಗಸು ಸ್ನಾನ ಮಾಡುತ್ತಿರುವುದನ್ನು
ನೋಡಿದನು. ಅವಳು ಅತ್ಯಂತ ಸುಂದರಳಾಗಿದ್ದಳು.
[3]ದಾವೀದನು ತನ್ನ ಸೇವಕರನ್ನು ಕರೆದು ಅವಳು
ಯಾರೆಂದು ಕೇಳಿದನು. ಒಬ್ಬ ಸೇವಕನು, ‘‘ಅವಳು
ಎಲೀಯಾಮನ ಮಗಳಾದ ಬತ್ಷೆಬೆಳು. ಹಿತ್ತಿಯನಾದ
ಊರೀಯನ ಹೆಂಡತಿ’’ ಎಂದು ಉತ್ತರಿಸಿದನು.

[4]ದಾವೀದನು ತನಗಾಗಿ ಬತ್ಷೆಬೆಳನ್ನು ಕರೆತರಲು
ಸಂದೇಶಕರನ್ನು ಕಳುಹಿಸಿದನು. ಅವಳು ದಾವೀದನ

---

**ರಬ್ಬ** ಅಮ್ಮೋನಿಯರ ರಾಜಧಾನಿ.

ಬಳಿಗೆ ಬಂದಾಗ ಅವನು ಅವಳೊಡನೆ ಲೈಂಗಿಕ ಸಂಬಂಧ
ವನ್ನು ಹೊಂದಿದನು. (ತನ್ನ ಮಾಸಿಕ ಮುಟ್ಟು ನಿಂತಮೇಲೆ
ತನ್ನನ್ನು ಶುದ್ಧಪಡಿಸಿಕೊಳ್ಳಲು ಆಕೆ ಸ್ನಾನಮಾಡಿಕೊಂಡ
ಮೇಲೆ ಇದು ಸಂಭವಿಸಿತು.* ) 5ಬಳಿಕ ಬತ್ಷೆಬೆ ಗರ್ಭಿಣಿ
ಯಾದಳು. ಅವಳು ದಾವೀದನಿಗೆ, ‘‘ನಾನು ಗರ್ಭಿಣಿ
ಯಾಗಿದ್ದೇನೆ’’ಎಂದು ಹೇಳಿಕಳುಹಿಸಿದಳು.

### ದಾವೀದನು ತನ್ನ ಪಾಪವನ್ನು ಮುಚ್ಚಿಡಲು ಪ್ರಯತ್ನಿಸುವನು

6ದಾವೀದನು ಯೋವಾಬನಿಗೆ, ‘‘ಹಿತ್ತಿಯನಾದ
ಊರೀಯನನ್ನು ನನ್ನ ಬಳಿಗೆ ಕಳುಹಿಸು’’ಎಂಬ ಸಂದೇಶ
ವನ್ನು ಕಳುಹಿಸಿದನು.

ಯೋವಾಬನು ಊರೀಯನನ್ನು ದಾವೀದನ ಬಳಿಗೆ
ಕಳುಹಿಸಿದನು. 7ಊರೀಯನು ದಾವೀದನ ಬಳಿಗೆ
ಬಂದನು. ದಾವೀದನು ಊರೀಯನ ಜೊತೆಯಲ್ಲಿ
ಮಾತನಾಡಿ, ಯೋವಾಬನು ಹೇಗಿದ್ದಾನೆ? ಸೈನಿಕರು
ಹೇಗಿದ್ದಾರೆ? ಯುದ್ಧವು ಹೇಗೆ ನಡೆಯುತ್ತಿದೆ? ಎಂದು
ಕೇಳಿದನು. 8ನಂತರ ದಾವೀದನು ಊರೀಯನಿಗೆ,
‘‘ಮನೆಗೆ ಹೋಗಿ ವಿಶ್ರಾಂತಿಯನ್ನು ಪಡೆ’’ ಎಂದನು.

ಊರೀಯನು ರಾಜನ ಮನೆಯನ್ನು ಬಿಟ್ಟು
ಹೋದನು. ಊರೀಯನಿಗೆ ರಾಜನು ಕೊಡುಗೆಗಳನ್ನು
ಸಹ ಕಳುಹಿಸಿದನು. 9ಆದರೆ ಊರೀಯನು ಮನೆಗೆ
ಹೋಗದೆ ಅರಮನೆಯ ಹೊರಬಾಗಿಲಿನಲ್ಲಿ ರಾಜನ
ಸೇವಕರೊಂದಿಗೆ ಮಲಗಿದನು. 10ಸೇವಕರು ದಾವೀದ
ನಿಗೆ, ‘‘ಊರೀಯನು ಮನೆಗೆ ಹೋಗಲೇ ಇಲ್ಲ’’ಎಂದು
ಹೇಳಿದರು.

ಆಗ ದಾವೀದನು, ‘‘ನೀನು ದೀರ್ಘ ಪ್ರವಾಸದಿಂದ
ಬಂದಿರುವೆ. ನೀನು ಏಕೆ ಮನೆಗೆ ಹೋಗಲಿಲ್ಲ?’’ ಎಂದು
ಊರೀಯನನ್ನು ಕೇಳಿದನು.

11ಊರೀಯನು ದಾವೀದನಿಗೆ, ‘‘ಪವಿತ್ರ ಪೆಟ್ಟಿಗೆಯೂ
ಇಸ್ರೇಲಿನ ಮತ್ತು ಯೆಹೂದದ ಸೈನಿಕರೂ ಗುಡಾರಗಳಲ್ಲಿ
ನೆಲೆಸಿದ್ದಾರೆ. ನನ್ನ ಒಡೆಯನಾದ ಯೋವಾಬನು ಮತ್ತು
ನನ್ನ ರಾಜನ ಸೇವಕರು ಹೊಲದಲ್ಲಿ ಪಾಳೆಯ ಮಾಡಿ
ಕೊಂಡಿದ್ದಾರೆ. ಆದ್ದರಿಂದ ಅನ್ನಪಾನಗಳನ್ನು ತೆಗೆದು
ಕೊಳ್ಳುವುದಕ್ಕೂ ಪತ್ನಿಯ ಜೊತೆಯಲ್ಲಿ ಮಲಗುವುದಕ್ಕೂ
ನಾನು ಮನೆಗೆ ಹೋಗುವುದು ಸರಿಯಲ್ಲ’’ಎಂದು
ಹೇಳಿದನು.

12ದಾವೀದನು ಊರೀಯನಿಗೆ, ‘‘ ಈ ದಿನ ಇಲ್ಲಿಯೇ
ಇರು. ನಾಳೆ ನಿನ್ನನ್ನು ಯುದ್ಧಕ್ಕೆ ಕಳುಹಿಸುತ್ತೇನೆ’’ ಎಂದು
ಹೇಳಿದನು.

ಊರೀಯನು ಅಂದು ಜೆರುಸಲೇಮಿನಲ್ಲಿಯೇ
ಉಳಿದುಕೊಂಡನು. ಅಂದರೆ ಮಾರನೆಯ ದಿನದ ಬೆಳಗಿ
ನವರೆಗೆ ಅಲ್ಲೇ ಇದ್ದನು. 13ಆಗ ದಾವೀದನು ತನ್ನನ್ನು
ಬಂದು ಕಾಣುವಂತೆ ಊರೀಯನಿಗೆ ಹೇಳಿ ಕಳುಹಿಸಿ
ದನು; ಊರೀಯನು ದಾವೀದನೊಂದಿಗೆ ಕುಡಿದು
ಊಟ ಮಾಡಿದನು. ದಾವೀದನು ಊರೀಯನನ್ನು
ಮತ್ತನನ್ನಾಗಿ ಮಾಡಿದನು. ಆದರೂ ಊರೀಯನು
ಮನೆಗೆ ಹೋಗಲಿಲ್ಲ. ಅಂದು ಸಂಜೆ ರಾಜನ ಮನೆಯ
ಹೊರಬಾಗಿಲಿನಲ್ಲಿ ಸೇವಕರೊಂದಿಗೆ ಮಲಗಲು
ಹೋದನು.

### ಊರೀಯನನ್ನು ಕೊಲ್ಲಲು ದಾವೀದನ ಉಪಾಯ

14ಮಾರನೆಯ ದಿನ ಬೆಳಿಗ್ಗೆ ದಾವೀದನು ಯೋವಾಬ
ನಿಗೆ ಒಂದು ಪತ್ರವನ್ನು ಬರೆದನು. ದಾವೀದನು ಆ
ಪತ್ರವನ್ನು ಊರೀಯನ ಕೈಯಿಂದ ಕಳುಹಿಸಿಕೊಟ್ಟನು.
15ದಾವೀದನು ಆ ಪತ್ರದಲ್ಲಿ, ‘‘ಯುದ್ಧವು ಹೆಚ್ಚು ಭೀಕರ
ವಾಗಿ ನಡೆಯುವ ಕಡೆ ಊರೀಯನನ್ನು ಮುಂದಿನ ಸಾಲಿ
ನಲ್ಲಿ ನಿಲ್ಲಿಸು. ಅವನನ್ನು ಒಬ್ಬಂಟಿಗನನ್ನಾಗಿ ಬಿಟ್ಟುಬಿಡಿ.
ಅವನು ಯುದ್ಧದಲ್ಲಿ ಕೊಲ್ಲಲ್ಪಡಲಿ’’ಎಂದು
ಬರೆದಿದ್ದನು.

16ಅಮ್ಮೋನಿಯರಲ್ಲಿ ಅತ್ಯಂತ ಧೈರ್ಯಶಾಲಿಗಳು ಆ
ನಗರದಲ್ಲಿ ಎಲ್ಲಿರುವರೆಂಬುದನ್ನು ಯೋವಾಬನು
ಗುರುತಿಸಿದನು. ಆ ಸ್ಥಳಕ್ಕೆ ಕಳುಹಿಸಲು ಊರೀಯನನ್ನು
ಆರಿಸಿಕೊಂಡನು. 17ಯೋವಾಬನ ವಿರುದ್ಧ ಹೋರಾ
ಡಲು ಆ ನಗರದ* ಜನರು ಹೊರಗೆ ಬಂದು ದಾವೀದನ
ಕೆಲವು ಜನರನ್ನು ಕೊಂದರು. ಹಿತ್ತಿಯನಾದ
ಊರೀಯನೂ ಅವರಲ್ಲೊಬ್ಬನಾಗಿದ್ದನು.

18ಅನಂತರ ಯೋವಾಬನು ತನ್ನ ಸಂದೇಶಕರಲ್ಲಿ ಒಬ್ಬ
ನನ್ನು ಕರೆದು, ‘‘ಯುದ್ಧದಲ್ಲಿ ಸಂಭವಿಸಿದ ಎಲ್ಲಾ ವಿವರ
ಗಳನ್ನು ದಾವೀದನಿಗೆ ತಿಳಿಸು. 19ನೀನು ಹೇಳಿ ಮುಗಿಸಿದ
ಮೇಲೆ 20ರಾಜನು ತಳಮಳಗೊಂಡು, ‘ಯೋವಾಬನ
ಸೈನ್ಯವು ಯುದ್ಧ ಮಾಡುವುದಕ್ಕಾಗಿ ನಗರದ ಹತ್ತಿರಕ್ಕೆ ಏಕೆ
ಹೋಯಿತು? ನಗರದ ಗೋಡೆಗಳ ಮೇಲಿರುವ ಜನರು,
ಕೆಳಗಿರುವ ಜನರ ಮೇಲೆ ಬಾಣಗಳನ್ನು ಪ್ರಯೋಗಿಸ
ಬಲ್ಲರೆಂಬುದು ಅವನಿಗೆ ಖಂಡಿತವಾಗಿಯೂ ತಿಳಿದಿದೆ.
21ಯೆರುಬ್ಬೆಷೆತನ ಮಗನಾದ ಅಬೀಮೆಲೆಕನನ್ನು ಯಾರು
ಕೊಂದರೆಂಬುದು ನಿಮಗೆ ಗೊತ್ತಿಲ್ಲವೇ? ಅಬೀಮೆಲೆಕನ
ಮೇಲೆ ಬೀಸುವ ಕಲ್ಲನ್ನು ನಗರದ ಗೋಡೆಯ ಮೇಲಿ
ನಿಂದ ಎಸೆದವಳು ತೇಬೇಚಿನ ಒಬ್ಬ ಹೆಂಗಸಲ್ಲವೇ?.
ನೀವು ಗೋಡೆಯ ಹತ್ತಿರಕ್ಕೆ ಏಕೆ ಹೋದಿರಿ?’ ಎಂದು
ಹೇಳಬಹುದು. ಆಗ ನೀನು, ‘ಹಿತ್ತಿಯನಾದ ನಿನ್ನ ಸೇವಕ

---

**ತನ್ನ … ಸಂಭವಿಸಿತು** ಅಕ್ಷರಶಃ, ‘‘ತನ್ನ ಅಶುಚಿತ್ವದಿಂದ ಆಕೆ ತನ್ನನ್ನು ಶುದ್ಧಪಡಿಸಿಕೊಂಡಳು.’’

**ಆ ನಗರ** ರಬ್ಬ ಎಂಬ ಅಮ್ಮೋನಿಯರ ನಗರ.

ಊರೀಯನು ಸಹ ಸತ್ತುಹೋದನು’ ಎಂದು ಉತ್ತರಿಸ
ಬೇಕು’’ ಎಂದು ಹೇಳಿಕಳುಹಿಸಿದನು.
22ಯೋವಾಬನು ತಿಳಿಸಲು ಹೇಳಿದ್ದನ್ನೆಲ್ಲವನ್ನೂ
ಸಂದೇಶಕನು ದಾವೀದನಿಗೆ ತಿಳಿಸಿದನು. 23ಸಂದೇಶಕನು
ದಾವೀದನಿಗೆ, ‘‘ಅಮ್ಮೋನಿಯರು ಮೈದಾನದಲ್ಲಿ
ನಮ್ಮ ಮೇಲೆ ಆಕ್ರಮಣ ಮಾಡಿದರು. ಆದರೆ ನಾವು ಅವ
ರೊಡನೆ ಹೋರಾಡಿ ನಗರದ ಬಾಗಿಲಿನವರೆಗೂ ಅಟ್ಟಿಸಿ
ಕೊಂಡು ಹೋದೆವು. 24ನಗರದ ಗೋಡೆಯ ಮೇಲಿದ್ದ
ಜನರು ನಿಮ್ಮ ಭಟರ ಮೇಲೆ ಬಾಣಗಳನ್ನು ಎಸೆದರು.
ನಿಮ್ಮ ಭಟರಲ್ಲಿ ಕೆಲವರನ್ನು ಕೊಂದರು. ಹಿತ್ತಿಯನಾದ
ನಿಮ್ಮ ಸೈನಿಕ ಊರೀಯನೂ ಸಹ ಸತ್ತುಹೋದನು’’
ಎಂದು ಹೇಳಿದನು.
25ದಾವೀದನು ಸಂದೇಶಕನಿಗೆ, ‘‘ನೀನು ಹೋಗಿ
ಯೋವಾಬನಿಗೆ: ‘ಇದರಿಂದ ನೀನು ತಳಮಳಗೊಳ್ಳ
ಬೇಡ. ಒಂದೇ ಖಡ್ಗವು ಈ ಹೊತ್ತು ಒಬ್ಬನನ್ನು ಕೊಂದರೆ,
ಇನ್ನೊಂದು ದಿನ ಇನ್ನೊಬ್ಬನನ್ನು ಕೊಲ್ಲುವುದು. ರಬ್ಬ
ನಗರದ ಮೇಲೆ ಧೈರ್ಯವಾಗಿ ಆಕ್ರಮಣ ಮಾಡು. ಆಗ
ನೀನು ನಗರವನ್ನು ಗೆಲ್ಲುವೆ!’ ಈ ಮಾತುಗಳಿಂದ
ಯೋವಾಬನನ್ನು ಹುರಿದುಂಬಿಸು’’ಎಂಬುದಾಗಿ
ಹೇಳಿದನು.

### ದಾವೀದನು ಬತ್ಷೆಬೆಳನ್ನು ಮದುವೆಯಾದನು

26ತನ್ನ ಗಂಡನಾದ ಊರೀಯನು ಸತ್ತನೆಂಬ ಸುದ್ದಿಯು
ಬತ್ಷೆಬೆಳಿಗೆ ತಿಳಿಯಿತು. ಆಗ ಅವಳು ತನ್ನ ಗಂಡನಿಗಾಗಿ
ಗೋಳಾಡಿದಳು. 27ಅವಳು ತನ್ನ ಶೋಕಕಾಲವನ್ನು
ಮುಗಿಸಿದ ನಂತರ, ಅವಳನ್ನು ತನ್ನ ಮನೆಗೆ ಕರೆತರಲು
ದಾವೀದನು ಸೇವಕರನ್ನು ಕಳುಹಿಸಿದನು. ಅವಳು
ದಾವೀದನ ಪತ್ನಿಯಾದಳು. ಅವಳು ದಾವೀದನಿಂದ
ಒಂದು ಗಂಡು ಮಗುವಿಗೆ ಜನ್ಮ ನೀಡಿದಳು. ದಾವೀದನು
ಮಾಡಿದ ಈ ಕೆಟ್ಟ ಕಾರ್ಯವು ಯೆಹೋವನಿಗೆ ದುಃಖ
ವುಂಟುಮಾಡಿತು.

### ನಾತಾನನು ದಾವೀದನೊಂದಿಗೆ ಮಾತಾಡಿದ್ದು

12 ಯೆಹೋವನು ನಾತನನನ್ನು ದಾವೀದನ ಬಳಿಗೆ
ಕಳುಹಿಸಿದನು. ನಾತಾನನು ದಾವೀದನ ಬಳಿಗೆ
ಬಂದು, ‘‘ಒಂದು ನಗರದಲ್ಲಿ ಇಬ್ಬರು ಮನುಷ್ಯರಿದ್ದರು.
ಒಬ್ಬನು ಶ್ರೀಮಂತ. ಆದರೆ ಮತ್ತೊಬ್ಬನು ತೀರಾ ಬಡವ.
2ಶ್ರೀಮಂತನ ಹತ್ತಿರ ಅನೇಕ ಕುರಿಗಳು ಮತ್ತು ದನಗಳು
ಇದ್ದವು. 3ಆದರೆ ಬಡವನ ಹತ್ತಿರ ಅವನೇ ತಂದ ಒಂದು
ಕುರಿಮರಿಯ ಹೊರತಾಗಿ ಬೇರೇನೂ ಇರಲಿಲ್ಲ. ಆ ಕುರಿ
ಮರಿಯನ್ನು ಬಹು ಪ್ರೀತಿಯಿಂದ ಆ ಬಡವನು ಸಾಕಿ
ದನು. ಅವನ ಮಕ್ಕಳೊಂದಿಗೆ ಈ ಕುರಿಮರಿಯೂ ಬೆಳೆ
ಯಿತು. ಆ ಕುರಿಮರಿಯು ಬಡವನ ಊಟವನ್ನೇ ತಿನ್ನು
ತ್ತಿತ್ತು. ಅವನ ಬಟ್ಟಲಿನಲ್ಲಿಯೇ ಅದು ನೀರನ್ನು ಕುಡಿಯು
ತ್ತಿತ್ತು. ಅವನ ಎದೆಯ ಮೇಲೆಯೇ ಆ ಕುರಿಮರಿಯು
ಮಲಗುತ್ತಿತ್ತು. ಆ ಕುರಿಮರಿಯು ಬಡವನಿಗೆ
ಮಗಳಂತೆಯೇ ಇತ್ತು.
4‘‘ಆಗ ಶ್ರೀಮಂತನ ಮನೆಗೆ ಒಬ್ಬ ಪ್ರಯಾಣಿಕನು
ಬಂದನು. ಶ್ರೀಮಂತನು ಆ ಪ್ರಯಾಣಿಕನಿಗೆ ಊಟವನ್ನು
ಕೊಡಲು ಇಚ್ಛಿಸಿದನು. ಆದರೆ ಶ್ರೀಮಂತನು ಆ
ಪ್ರಯಾಣಿಕನಿಗೆ ಕೊಡಲು ತನ್ನ ಸ್ವಂತ ಕುರಿಗಳಿಂದಾಗಲೀ
ದನಗಳಿಂದಾಗಲೀ ಯಾವುದನ್ನೇ ಆಗಲಿ ತೆಗೆದುಕೊಳ್ಳಲು
ಇಚ್ಛಿಸಲಿಲ್ಲ. ಶ್ರೀಮಂತನು ಆ ಬಡವನಿಂದ ಕುರಿಮರಿ
ಯನ್ನು ತೆಗೆದುಕೊಂಡು ಅದನ್ನು ಕೊಯ್ಯಿಸಿ ತನ್ನ ಅತಿಥಿ
ಗಾಗಿ ಅಡಿಗೆ ಮಾಡಿಸಿದನು’’ ಎಂದು ಹೇಳಿದನು.
5ದಾವೀದನು ಶ್ರೀಮಂತನ ಮೇಲೆ ಬಹಳ ಕೋಪ
ಗೊಂಡನು. ಅವನು ನಾತಾನನಿಗೆ, ‘‘ಯೆಹೋವನ ಆಣೆ
ಯಾಗಿ ಈ ಕಾರ್ಯವನ್ನು ಮಾಡಿದ ಮನುಷ್ಯನು
ಸಾಯಲೇಬೇಕು! 6ಅವನು ಕರುಣೆಯಿಲ್ಲದೆ ಇಂತಹ ಕೆಟ್ಟ
ಕಾರ್ಯವನ್ನು ಮಾಡಿದ್ದಕ್ಕಾಗಿ ಕುರಿಮರಿಯ ಬೆಲೆಯ
ನಾಲ್ಕರಷ್ಟು ಹಿಂದಕ್ಕೆ ಕೊಡಲೇಬೇಕು’’ಎಂದು
ಹೇಳಿದನು.

### ನಾತಾನನು ದಾವೀದನ ಪಾಪದ ಬಗ್ಗೆ ಹೇಳಿದನು

7ಆಗ ನಾತಾನನು ದಾವೀದನಿಗೆ, ‘‘ನೀನೇ ಆ ಮನುಷ್ಯ!
ಇಸ್ರೇಲರ ದೇವರಾದ ಯೆಹೋವನು ಇಂತೆನ್ನುತ್ತಾನೆ:
‘ನಿನ್ನನ್ನು ಇಸ್ರೇಲರ ರಾಜನನ್ನಾಗಿ ಆರಿಸಿದವನು ನಾನೇ.
ಸೌಲನಿಂದ ನಿನ್ನನ್ನು ರಕ್ಷಿಸಿದವನು ನಾನೇ. 8ಅವನ
ಕುಟುಂಬವನ್ನೂ ಅವನ ಪತ್ನಿಯರನ್ನೂ ನಿನಗೆ ಕೊಟ್ಟ
ವನು ನಾನೇ. ನಿನ್ನನ್ನು ಇಸ್ರೇಲಿನ ಮತ್ತು ಯೆಹೂದದ
ರಾಜನನ್ನಾಗಿ ಮಾಡಿದವನು ನಾನೇ. ಅದು ಸಾಲದು
ಎನ್ನುವಂತೆ, ನಾನು ಮತ್ತಷ್ಟು ಹೆಚ್ಚಿನದನ್ನೂ ನೀಡಿದೆನು.
9ನೀನು ಯೆಹೋವನ ಆಜ್ಞೆಯನ್ನು ಏಕೆ ಕಡೆಗಣಿಸಿದೆ?
ಆತನು ತಪ್ಪೆಂದು ಹೇಳಿದ ಕಾರ್ಯವನ್ನು ಏಕೆ ಮಾಡಿದೆ?
ಹಿತ್ತಿಯನಾದ ಊರೀಯನನ್ನು ಕತ್ತಿಯಿಂದ ನೀನು
ಕೊಲ್ಲಿಸಿದೆ. ಅವನ ಪತ್ನಿಯನ್ನು ನಿನ್ನ ಪತ್ನಿಯನ್ನಾಗಿ
ಸ್ವೀಕರಿಸಿದೆ. ಹೌದು, ನೀನು ಅಮ್ಮೋನಿಯರ ಕತ್ತಿಯಿಂದ
ಊರೀಯನನ್ನು ಕೊಲ್ಲಿಸಿದೆ. 10ನೀನು ಅವನ
ಹೆಂಡತಿಯನ್ನು ತೆಗೆದು ಕೊಂಡದ್ದರಿಂದ ಮತ್ತು ನನ್ನ
ಆಜ್ಞೆಯನ್ನು ತಿರಸ್ಕರಿಸಿದ್ದರಿಂದ ಕತ್ತಿಯು ನಿನ್ನ
ಕುಟುಂಬವನ್ನು ಸದಾ ಹಿಡಿದಿರುವುದು.’
11‘‘ಯೆಹೋವನು ಹೇಳುವುದೇನೆಂದರೆ: ‘ನಾನು
ನಿನಗೆ ತೊಂದರೆಯನ್ನುಂಟು ಮಾಡುತ್ತೇನೆ. ನಿನ್ನ ಸ್ವಂತ
ಕುಟುಂಬದಿಂದಲೇ ಈ ತೊಂದರೆಯು ಬರುತ್ತದೆ. ನಾನು
ನಿನ್ನ ಪತ್ನಿಯರನ್ನು ತೆಗೆದುಕೊಂಡು ನಿನಗೆ ತೀರ ಹತ್ತಿರ
ನಾಗಿರುವ ಒಬ್ಬ ವ್ಯಕ್ತಿಗೆ ಕೊಡುತ್ತೇನೆ. ಅವನು ನಿನ್ನ

ಪತ್ನಿಯರ ಜೊತೆಯಲ್ಲಿ ಮಲಗುತ್ತಾನೆ. ಇದು ಎಲ್ಲರಿಗೂ
ತಿಳಿಯುತ್ತದೆ. *[12]ನೀನು ಬತ್ಷೆಬೆಳೊಂದಿಗೆ ಗುಟ್ಟಾಗಿ
ಮಲಗಿದೆ. ಆದರೆ ನಾನು ಹೇಳುತ್ತಿರುವ ಮಾತೆಲ್ಲಾ
ಇಸ್ರೇಲ್ ಜನರ ಕಣ್ಣೆದುರಿನಲ್ಲಿ ನಡೆಯುವುದು''*
ಎಂದು ಹೇಳಿದನು.

[13]ಆಗ ದಾವೀದನು ನಾತಾನನಿಗೆ, ''ನಾನು ಯೆಹೋವ
ನಿಗೆ ವಿರುದ್ಧವಾಗಿ ಪಾಪಮಾಡಿದೆನು'' ಎಂದನು.

ನಾತಾನನು ದಾವೀದನಿಗೆ, ''ಯೆಹೋವನು ನಿನ್ನ ಪಾಪ
ವನ್ನು ಕ್ಷಮಿಸಿದ್ದಾನೆ. ನೀನು ಸಾಯುವುದಿಲ್ಲ. [14]ನೀನು
ನಿನ್ನ ಪಾಪಕೃತ್ಯಗಳಿಂದ ಯೆಹೋವನ ವೈರಿಗಳು
ಯೆಹೋವನನ್ನು ಹೆಚ್ಚು ದ್ವೇಷಿಸುವಂತೆ ಮಾಡಿದೆ. ನಿನಗೆ
ಹುಟ್ಟಿದ ಗಂಡುಮಗು ಈ ಕಾರಣಕ್ಕಾಗಿ ಸತ್ತು
ಹೋಗುವುದು''ಎಂದು ಹೇಳಿದನು.

### ದಾವೀದ ಮತ್ತು ಬತ್ಷೆಬೆಳ ಮಗುವಿನ ಮರಣ

[15]ನಾತಾನನು ಮನೆಗೆ ಹೋದನು. ದಾವೀದನಿಗೆ
ಊರೀಯನ ಹೆಂಡತಿಯಲ್ಲಿ ಹುಟ್ಟಿದ ಗಂಡುಮಗುವಿಗೆ
ಯೆಹೋವನು ಬಹಳ ಕಾಯಿಲೆಯನ್ನು ಬರಮಾಡಿದನು.
[16]ದಾವೀದನು ಮಗುವಿಗಾಗಿ ದೇವರಲ್ಲಿ ಪ್ರಾರ್ಥಿಸಿದನು.
ಅವನು ಉಪವಾಸ ಮಾಡಿದನು. ಅವನು ತನ್ನ ಮನೆ
ಯೊಳಗೇ ಇದ್ದನು. ಅವನು ರಾತ್ರಿಯೆಲ್ಲ ನೆಲದ ಮೇಲೇ
ಬಿದ್ದುಕೊಂಡಿದ್ದನು.

[17]ದಾವೀದನ ಕುಟುಂಬದ ನಾಯಕರು ಬಂದು
ಅವನನ್ನು ನೆಲದಿಂದ ಮೇಲಕ್ಕೆತ್ತಲು ಪ್ರಯತ್ನಿಸಿದರು
ಆದರೆ ದಾವೀದನು ಮೇಲೇಳಲಿಲ್ಲ. ಅವನು ಈ ನಾಯಕ
ರೊಂದಿಗೆ ಊಟಮಾಡಲಿಲ್ಲ. [18]ಏಳನೆಯ ದಿನ ಆ ಮಗು
ಸತ್ತಿತು. ಮಗು ಸತ್ತದ್ದನ್ನು ದಾವೀದನಿಗೆ ತಿಳಿಸಲು ಅವನ
ಸೇವಕರು ಅಂಜಿದರು. ಅವರು, ''ನೋಡಿ, ಮಗು
ಜೀವಂತವಾಗಿರುವಾಗ ನಾವು ದಾವೀದನೊಂದಿಗೆ ಮಾತ
ನಾಡಲು ಪ್ರಯತ್ನಿಸಿದೆವು. ಆದರೆ ಅವನು ನಮ್ಮ ಮಾತನ್ನು
ಕೇಳಲಿಲ್ಲ. ಮಗುವು ಸತ್ತಿತೆಂದು ನಾವು ದಾವೀದನಿಗೆ
ತಿಳಿಸಿದರೆ, ಬಹುಶಃ ಅವನು ತನಗೆ ಏನಾದರೂ ಕೇಡು
ಮಾಡಿಕೊಳ್ಳುತ್ತಾನೆ'' ಎಂಬದಾಗಿ ಮಾತಾಡಿಕೊಂಡರು.

[19]ಆದರೆ ದಾವೀದನು ತನ್ನ ಸೇವಕರು ಗುಸುಗುಸು
ಮಾತನಾಡುವುದನ್ನು ಕೇಳಿ, ಮಗು ಸತ್ತಿದೆಯೆಂಬುದನ್ನು
ಅರ್ಥಮಾಡಿಕೊಂಡನು. ಆದ್ದರಿಂದ ದಾವೀದನು ತನ್ನ
ಸೇವಕರನ್ನು, ''ಮಗು ಸತ್ತುಹೋಯಿತೇ'' ಎಂದು
ಕೇಳಿದನು.

''ಹೌದು, ಸತ್ತುಹೋಯಿತು'' ಎಂದು ಸೇವಕರು
ಉತ್ತರಿಸಿದರು.

[20]ಆಗ ದಾವೀದನು ನೆಲದಿಂದ ಮೇಲಕ್ಕೆದ್ದನು. ಅವನು
ತನ್ನನ್ನು ಶುಚಿಗೊಳಿಸಿಕೊಂಡನು. ಅವನು ತನ್ನ ಬಟ್ಟೆ
ಗಳನ್ನು ಬದಲಿಸಿ ಬೇರೆ ಬಟ್ಟೆಗಳನ್ನು ಧರಿಸಿದನು. ನಂತರ
ಅವನು ಯೆಹೋವನನ್ನು ಆರಾಧಿಸುವುದಕ್ಕಾಗಿ ಆತನ
ಆಲಯಕ್ಕೆ ಹೋದನು. ಅವನು ಮನೆಗೆ ಹೋಗಿ ತಿನ್ನಲು
ಏನನ್ನಾದರೂ ಕೊಡುವಂತೆ ಕೇಳಿದನು. ಅವನ ಸೇವಕರು
ಕೊಟ್ಟ ಸ್ವಲ್ಪ ಆಹಾರವನ್ನು ಅವನು ತಿಂದನು.

[21]ದಾವೀದನ ಸೇವಕರು ಅವನಿಗೆ, ''ನೀನು ಹೀಗೇಕೆ
ಮಾಡುತ್ತಿರುವೆ? ಮಗುವು ಇನ್ನೂ ಜೀವಂತವಾಗಿದ್ದಾಗ
ನೀನು ಊಟ ಮಾಡಲಿಲ್ಲ. ನೀನು ಗೋಳಾಡಿದೆ. ಆದರೆ
ಮಗುವು ಸತ್ತಮೇಲೆ ನೀನು ಮೇಲಕ್ಕೆದ್ದು ಊಟ
ಮಾಡಿದೆ?'' ಎಂದು ಕೇಳಿದರು.

[22]ದಾವೀದನು, ''ಮಗು ಜೀವದಿಂದ ಇರುವಾಗ ನಾನು
ಊಟಮಾಡದೆ ಗೋಳಾಡಿದೆ, ಏಕೆಂದರೆ 'ಒಂದುವೇಳೆ
ಯೆಹೋವನು ನನ್ನ ಬಗ್ಗೆ ಅನುಕಂಪವನ್ನು ತೋರಿ ಮಗು
ವನ್ನು ಬದುಕಿಸಬಹುದು' ಎಂದು ನಾನು ಯೋಚಿಸಿ
ಕೊಂಡಿದ್ದೆ, [23]ಆದರೆ ಈಗ ಮಗು ಸತ್ತುಹೋಗಿದೆ. ಆದ್ದ
ರಿಂದ ಈಗ ನಾನು ಯಾಕೆ ಊಪವಾಸ ಮಾಡಬೇಕು?
ಆ ಮಗುವಿಗೆ ಮತ್ತೆ ನಾನು ಜೀವವನ್ನು ಕೊಡಲು
ಸಾಧ್ಯವೇ? ಇಲ್ಲ! ಎಂದಾದರೂ ಒಂದು ದಿನ ನಾನು
ಅವನ ಬಳಿಗೆ ಹೋಗುತ್ತೇನೆ. ಆದರೆ ಅವನು ನನ್ನ ಬಳಿಗೆ
ಹಿಂದಿರುಗುವುದಿಲ್ಲ'' ಎಂದನು.

### ಸೊಲೊಮೋನನು ಹುಟ್ಟಿದ್ದು

[24]ನಂತರ ದಾವೀದನು ತನ್ನ ಪತ್ನಿಯಾದ ಬತ್ಷೆಬೆಳನ್ನು
ಸಂತೈಸಿ ಅವಳೊಂದಿಗೆ ಮಲಗಿಕೊಂಡನು. ಬತ್ಷೆಬೆಳು
ಮತ್ತೆ ಗರ್ಭಿಣಿಯಾದಳು . ಅವಳಿಗೆ ಮತ್ತೊಂದು ಗಂಡು
ಮಗುವಾಯಿತು. ಆ ಮಗುವಿಗೆ ಸೊಲೊಮೋನ್
ಎಂದು ದಾವೀದನು ಹೆಸರಿಟ್ಟನು. ಯೆಹೋವನು
ಸೊಲೊಮೋನನನ್ನು ಪ್ರೀತಿಸಿದನು. [25]ಯೆಹೋವನು
ಪ್ರವಾದಿಯಾದ ನಾತಾನನ ಮೂಲಕವಾಗಿ ಸಂದೇಶವನ್ನು
ಕಳುಹಿಸಿದನು. ಯೆಹೋವನು ಆಜ್ಞಾಪಿಸಿದಂತೆ
ನಾತಾನನು ಸೊಲೊಮೋನನಿಗೆ ಯೆದೀದ್ಯನೆಂದು*
ಹೆಸರಿಟ್ಟನು.

### ದಾವೀದನು ರಬ್ಬವನ್ನು ವಶಪಡಿಸಿಕೊಂಡದ್ದು

[26]ಯೋವಾಬನು ಅಮ್ಮೋನಿಯರ ರಾಜಧಾನಿಯಾದ
ರಬ್ಬಕ್ಕೆ ವಿರುದ್ಧವಾಗಿ ಹೋರಾಡಿ ಆ ನಗರವನ್ನು ವಶ
ಪಡಿಸಿಕೊಂಡನು. [27]ಯೋವಾಬನು ದಾವೀದನ ಬಳಿಗೆ
ಸಂದೇಶಕರನ್ನು ಕಳುಹಿಸಿ, ''ನಾನು ರಬ್ಬದ ವಿರುದ್ಧ

---

**ಇದು … ತಿಳಿಯುತ್ತದೆ** ಅಕ್ಷರಶಃ,''ಸೂರ್ಯನ ನೋಟದಂತೆ.''

**ಇಸ್ರೇಲಿನ … ನಡೆಯುವುದು** ಅಕ್ಷರಶಃ, ''ಇಸ್ರೇಲರೆಲ್ಲರ ಎದುರಿನಲ್ಲಿ ಮತ್ತು ಸೂರ್ಯನ ಎದುರಿನಲ್ಲಿ .''

**ಯೆದೀದ್ಯ** ಈ ಹೆಸರಿನ ಅರ್ಥವೆಂದರೆ, ''ಯೆಹೋವನಿಂದ ಪ್ರೀತಿಸಲ್ಪಟ್ಟವನು.''

ಹೋರಾಡಿ ನೀರಿರುವ ನಗರವನ್ನು ವಶಪಡಿಸಿಕೊಂಡಿದ್ದೇನೆ. 28ಈಗ ಇತರ ಜನರನ್ನು ಒಟ್ಟುಗೂಡಿಸಿಕೊಂಡು ಬಂದು ಈ ನಗರಕ್ಕೆ ಮುತ್ತಿಗೆ ಹಾಕು. ನಾನು ಈ ನಗರವನ್ನು ವಶಪಡಿಸಿ ಕೊಳ್ಳುವುದಕ್ಕೆ ಮೊದಲೇ ಇದನ್ನು ವಶಪಡಿಸಿಕೊ ಈ ನಗರವನ್ನು ನಾನು ವಶಪಡಿಸಿಕೊಂಡರೆ ಇದನ್ನು ನನ್ನ ಹೆಸರಿನಿಂದ ಕರೆಯಬೇಕಾಗುವುದು'' ಎಂದು ಹೇಳಿ ಕಳುಹಿಸಿದನು.

29ಆಗ ದಾವೀದನು ಜನರೆಲ್ಲರನ್ನು ಒಟ್ಟುಗೂಡಿಸಿಕೊಂಡು ರಬ್ಬಕ್ಕೆ ಹೋದನು. ಅವನು ರಬ್ಬದ ವಿರುದ್ಧ ಹೋರಾಡಿ ಆ ನಗರವನ್ನು ವಶಪಡಿಸಿಕೊಂಡನು. 30ದಾವೀದನು ಅವರ ರಾಜನ ತಲೆಯ* ಮೇಲಿದ್ದ ಕಿರೀಟವನ್ನು ತೆಗೆದುಕೊಂಡನು. ಆ ಕೀರಿಟವು ಚಿನ್ನದ್ದೂ ಎಪ್ಪತ್ತೈದು ಪೌಂಡುಗಳಷ್ಟು ಭಾರವುಳ್ಳದ್ದೂ ಆಗಿತ್ತು. ಆ ಕಿರೀಟದಲ್ಲಿ ಬೆಲೆಬಾಳುವ ರತ್ನಗಳಿದ್ದವು. ಅವರು ಆ ಕಿರೀಟವನ್ನು ದಾವೀದನ ತಲೆಯ ಮೇಲೆ ಇಟ್ಟರು. ದಾವೀದನು ಆ ನಗರದಿಂದ ಅನೇಕ ಬೆಲೆಬಾಳುವ ವಸ್ತುಗಳನ್ನು ತಂದನು.

31ದಾವೀದನು ರಬ್ಬ ನಗರದ ಜನರನ್ನು ಹೊರದೂಡಿದನು. ದಾವೀದನು ಅವರನ್ನು ಗರಗಸ, ಕಬ್ಬಿಣದ ಗುದ್ದಲಿ ಮತ್ತು ಕೊಡಲಿಗಳಿಂದ ಕೆಲಸ ಮಾಡಿಸಿದನು. ಅವನು ಅವರಿಂದ ಬಲವಂತವಾಗಿ ಇಟ್ಟಿಗೆಗಳಿಂದ ಕಟ್ಟಡವನ್ನು ಕಟ್ಟಿಸಿದನು. ಅಮ್ಮೋನಿಯರ ನಗರಗಳಲ್ಲೆಲ್ಲಾ ದಾವೀದನು ಇದೇ ರೀತಿ ಮಾಡಿದನು. ನಂತರ ದಾವೀದನು ತನ್ನ ಸೈನ್ಯದೊಂದಿಗೆ ಜೆರುಸಲೇಮಿಗೆ ಹಿಂದಿರುಗಿದನು.

## ಅಮ್ನೋನನು ತಾಮಾರಳನ್ನು ಮೋಹಿಸಿದ್ದು

13 ದಾವೀದನಿಗೆ ಅಬ್ಷಾಲೋಮನೆಂಬ ಮಗನಿದ್ದನು. ಅವನಿಗೆ ತಾಮಾರಳೆಂಬ ತಂಗಿಯಿದ್ದಳು. ಆಕೆ ಬಹಳ ಸುಂದರಿಯಾಗಿದ್ದಳು. ದಾವೀದನ ಮತ್ತೊಬ್ಬ ಮಗನಾದ ಅಮ್ನೋನನು,* 2ತಾಮಾರಳನ್ನು ಮೋಹಿಸಿದನು. ತಾಮಾರಳು ಕನ್ಯೆಯಾಗಿದ್ದಳು. ಈ ಕಾರಣದಿಂದ ಅವನು ಆಕೆಗೆ ಏನು ಮಾಡಲೂ ಸಾಧ್ಯವಿರಲಿಲ್ಲ. ಅವಳ ಮೋಹದಲ್ಲಿಯೇ ಅಮ್ನೋನನು ಬಹಳ ಬಲಹೀನನಾದನು.*

3ಅಮ್ನೋನನಿಗೆ ಶಿಮ್ಮನ ಮಗನಾದ ಯೋನಾದಾಬನೆಂಬ ಹೆಸರಿನ ಗೆಳೆಯನಿದ್ದನು. (ಶಿಮ್ಮನು ದಾವೀದನ ಸೋದರ.) ಯೋನಾದಾಬನು ಬಹಳ ಯುಕ್ತಿಯುಳ್ಳ ಮನುಷ್ಯ. 4ಯೋನಾದಾಬನು ಅಮ್ನೋನನಿಗೆ, ''ದಿನದಿಂದ ದಿನಕ್ಕೆ ನೀನು ತೆಳ್ಳಗಾಗುತ್ತಲೇ ಇರುವೆ. ನೀನು ರಾಜನ ಮಗ. ನಿನ್ನ ಬಳಿ ತಿನ್ನಲು ಬಹಳ ಇದ್ದರೂ ನೀನು ತೆಳ್ಳಗಾಗುತ್ತಿರುವುದು ಏಕೆ? ನನಗೆ ತಿಳಿಸು'' ಎಂದು ಕೇಳಿದನು.

ಅಮ್ನೋನನು ಯೋನಾದಾಬನಿಗೆ, ''ನಾನು ತಾಮಾರಳನ್ನು ಮೋಹಿಸಿದ್ದೇನೆ. ಆದರೆ ಅವಳು ನನ್ನ ಸೋದರನಾದ ಅಬ್ಷಾಲೋಮನ ತಂಗಿ'' ಎಂದು ಹೇಳಿದನು.

5ಯೋನಾದಾಬನು ಅಮ್ನೋನನಿಗೆ, ''ನೀನು ಹೋಗಿ ಹಾಸಿಗೆಯಲ್ಲಿ ಮಲಗಿಕೋ. ನೀನು ಕಾಯಿಲೆಯವನಂತೆ ನಟಿಸು. ಆಗ ನಿನ್ನನ್ನು ನೋಡಲು ನಿನ್ನ ತಂದೆಯು ಬರುತ್ತಾನೆ. ಆಗ ನೀನು ಅವನಿಗೆ, 'ದಯವಿಟ್ಟು ನನ್ನ ಸೋದರಿಯಾದ ತಾಮಾರಳು ಇಲ್ಲಿಗೆ ಬಂದು, ನನಗೆ ಊಟವನ್ನು ಕೊಡಲಿ. ಅವಳು ನನ್ನ ಎದುರಿನಲ್ಲೇ ಅಡಿಗೆಯನ್ನು ಮಾಡಲಿ. ನಾನು ಅದನ್ನು ಕಣ್ಣಾರೆಕಂಡು ಅವಳ ಕೈಗಳಿಂದ ಊಟಮಾಡುತ್ತೇನೆ' ಎಂದು ಹೇಳು'' ಎಂಬುದಾಗಿ ಹೇಳಿಕೊಟ್ಟನು.

6ಅಮ್ನೋನನು ಹಾಸಿಗೆಯಲ್ಲಿ ಮಲಗಿ ಕಾಯಿಲೆಯವನಂತೆ ನಟಿಸಿದನು. ಅವನನ್ನು ನೋಡಲು ರಾಜನಾದ ದಾವೀದನು ಅಲ್ಲಿಗೆ ಬಂದನು. ಅಮ್ನೋನನು ರಾಜನಾದ ದಾವೀದನಿಗೆ , ''ದಯವಿಟ್ಟು ನನ್ನ ಸೋದರಿಯಾದ ತಾಮಾರಳನ್ನು ಒಳಕ್ಕೆ ಕರೆಯಿರಿ. ನಾನು ನೋಡುತ್ತಿರುವಂತೆ ಅವಳು ನನಗಾಗಿ ಎರಡು ಸಿಹಿ ರೊಟ್ಟಿಗಳನ್ನು ತಯಾರಿಸಲಿ. ಅವಳ ಕೈಗಳಿಂದ ಮಾಡಿದ ರೊಟ್ಟಿಗಳನ್ನೇ ನಾನು ತಿನ್ನುತ್ತೇನೆ''ಎಂದನು.

7ದಾವೀದನು ತಾಮಾರಳ ಮನೆಗೆ ಸಂದೇಶಕರನ್ನು ಕಳುಹಿಸಿದನು. ಸಂದೇಶಕರು ತಾಮಾರಳಿಗೆ, ''ನಿನ್ನ ಸೋದರನಾದ ಅಮ್ನೋನನ ಮನೆಗೆ ಹೋಗಿ ಅವನಿಗೆ ಸ್ವಲ್ಪ ಊಟವನ್ನು ತಯಾರಿಸು'' ಎಂದರು.

## ತಾಮಾರಳು ಅಮ್ನೋನನಿಗೆ ಊಟವನ್ನು ತಯಾರಿಸಿದ್ದು

8ತಾಮಾರಳು ತನ್ನ ಸೋದರನಾದ ಅಮ್ನೋನನ ಮನೆಗ ಹೋದಳು. ಅಮ್ನೋನನು ಹಾಸಿಗೆಯಲ್ಲಿ ಮಲಗಿದ್ದನು. ತಾಮಾರಳು ಸ್ವಲ್ಪ ಹಿಟ್ಟನ್ನು ತೆಗೆದುಕೊಂಡು ಅದನ್ನು ತನ್ನ ಕೈಗಳಿಂದಲೇ ಕಲಸಿ ಅಮ್ನೋನನ ಕಣ್ಣೆದುರಿನಲ್ಲಿಯೇ ನಾದಿದಳು. ನಂತರ ಅವಳು ನಾದಿದ ಹಿಟ್ಟನ್ನು ಸುಟ್ಟು ರೊಟ್ಟಿಗಳನ್ನು ಮಾಡಿದಳು. 9ತಾಮಾರಳು ರೊಟ್ಟಿಗಳನ್ನು ರೊಟ್ಟಿಮಾಡುವ ಪಾತ್ರೆಯಿಂದ ಹೊರತೆಗೆದು ಅಮ್ನೋನನಿಗೋಸ್ಕರ ಅವುಗಳನ್ನು ಬಡಿಸಿದಳು. ಆದರೆ ಅಮ್ನೋನನು ತಿನ್ನಲಿಲ್ಲ. ಅಮ್ನೋನನು ತನ್ನ ಸೇವಕರೆಲ್ಲರಿಗೆ,

---

**ಅವರ ರಾಯನ ತಲೆ** ಅಥವಾ, ''ಮಲ್ಕಾಮನ ತಲೆ.'' ಅಮ್ಮೋನಿಯರು ಆರಾಧಿಸು ಒಂದು ಸುಳ್ಳುದೇವತೆಯೇ ಮಲ್ಕಾಮನು.

**ಅಮ್ನೋನ್** ಅಮ್ನೋನನು ಅಬ್ಷಾಲೋಮ ಮತ್ತು ತಾಮಾರಳ ಅರ್ಧ ಸೋದರನು. ಅವರೆಲ್ಲರಿಗೂ ದಾವೀದನೇ ತಂದೆ. ಆದರೆ ಅಮ್ನೋನನ ತಾಯಿಯು ಬೇರೆ.

**ಅವಳ … ಬಲಹೀನನಾದನು** ಅಥವಾ ''ಅಮ್ನೋನನು ಕಾಯಿಲೆಯವನಂತೆ ನಟಿಸಿದನು.''

‘‘ನೀವೆಲ್ಲರೂ ನನ್ನನ್ನು ಒಬ್ಬಂಟಿಗನನ್ನಾಗಿ ಬಿಟ್ಟು ಹೋಗಿ!’’ ಎಂದನು. ಆದ್ದರಿಂದ ಸೇವಕರೆಲ್ಲರೂ ಅಮ್ನೋನನ ಕೊಠಡಿಯಿಂದ ಹೊರಗೆ ಹೋದರು.

### ಅಮ್ನೋನನು ತಾಮಾರಳನ್ನು ಕೆಡಿಸಿದ್ದು

10ಅಮ್ನೋನನು ತಾಮಾರಳಿಗೆ, ‘‘ರೊಟ್ಟಿಗಳನ್ನು ಒಳ
ಕೋಣೆಗೆ ತೆಗೆದುಕೊಂಡು ಬಾ. ನಾನು ನಿನ್ನ ಕೈಗಳಿಂದಲೇ
ತಿನ್ನುತ್ತೇನೆ’’ ಎಂದನು.

ತಾಮಾರಳು ತನ್ನ ಸೋದರನಾದ ಅಮ್ನೋನನಿದ್ದ ಒಳ
ಕೋಣೆಗೆ ಹೋದಳು. ಅವಳು ತಾನು ಮಾಡಿದ್ದ ರೊಟ್ಟಿ
ಗಳನ್ನು ತಂದಳು. 11ತನ್ನ ಕೈಗಳಿಂದಲೇ ಅಮ್ನೋನನು
ತಿನ್ನಲಿ ಎಂಬುದಕ್ಕಾಗಿ ಅವಳು ಅವನ ಬಳಿಗೆ ಹೋದಳು.
ಆದರೆ ಅಮ್ನೋನನು ತಾಮಾರಳನ್ನು ಬಿಗಿಯಾಗಿ ಹಿಡಿದು
ಕೊಂಡನು. ಅವನು ಅವಳಿಗೆ, ‘‘ತಂಗಿಯೇ, ಬಂದು ನನ್ನ
ಜೊತೆಯಲ್ಲಿ ಮಲಗು’’ಎಂದು ಹೇಳಿದನು.

12ತಾಮಾರಳು ಅಮ್ನೋನನಿಗೆ, ‘‘ಸೋದರನೇ ಬೇಡ!
ನನ್ನನ್ನು ಬಲಾತ್ಕರಿಸದಿರು! ಇಸ್ರೇಲಿನಲ್ಲಿ ಇಂತಹ ಕಾರ್ಯ
ಎಂದೆಂದಿಗೂ ನಡೆಯಬಾರದು! ಅಪಮಾನಕರವಾದ ಈ
ಕಾರ್ಯವನ್ನು ಮಾಡಬೇಡ! 13ನನಗಾದ ಈ ಕಳಂಕವನ್ನು
ಎಂದೆಂದಿಗೂ ನಾನು ತೊಡೆದು ಹಾಕಲಾಗುವುದಿಲ್ಲ.
ಇಸ್ರೇಲಿನ ಜನರಲ್ಲಿ ತಮ್ಮ ಅಪಮಾನಕರವಾದ ಕಾರ್ಯ
ಗಳಿಂದ ನೀಚರೆನಿಸಿಕೊಳ್ಳುವ ಜನರಂತೆ ನೀನೂ ಆಗಿ
ಬಿಡುವೆ. ದಯವಿಟ್ಟು ರಾಜನೊಂದಿಗೆ ಮಾತನಾಡು.
ಅವನು ನಿನ್ನ ಜೊತೆಯಲ್ಲಿ ನನ್ನ ಮದುವೆ ಮಾಡಲಿ’’
ಎಂದಳು.

14ಆದರೆ ತಾಮಾರಳ ಮಾತುಗಳನ್ನು ಅಮ್ನೋನನು
ಕೇಳಲಿಲ್ಲ. ಅವನು ತಾಮಾರಳಿಗಿಂತ ಬಲಶಾಲಿಯಾಗಿ
ದ್ದುದರಿಂದ ಅವಳ ಮೇಲೆ ಬಲಾತ್ಕಾರ ಮಾಡಿದನು.
15ಅನಂತರ ಅಮ್ನೋನನು ತಾಮಾರಳನ್ನು ದ್ವೇಷಿಸಿದನು.
ಅಮ್ನೋನನು ತಾನು ಅವಳನ್ನು ಮೊದಲು ಮೋಹಿಸಿದುದ
ಕ್ಕಿಂತ ಹೆಚ್ಚಾಗಿ ದ್ವೇಷಿಸಿದನು. ಅಮ್ನೋನನು ತಾಮಾರ
ಳಿಗೆ, ‘‘ಮೇಲೇಳು, ಹೊರಟು ಹೋಗು!’’ ಎಂದನು.

16ತಾಮಾರಳು ಅಮ್ನೋನನಿಗೆ, ‘‘ಇಲ್ಲ! ನನ್ನನ್ನು
ಹೊರಗೆ ಕಳುಹಿಸುವುದು ನೀನು ಮೊದಲು ಮಾಡಿದ್ದ
ಕ್ಕಿಂತಲೂ ಹೆಚ್ಚಿನ ದುಷ್ಕಾರ್ಯವಾಗಿದೆ’’ ಎಂದು
ಹೇಳಿದಳು.

ಆದರೆ ಅಮ್ನೋನನು ತಾಮಾರಳ ಮಾತುಗಳನ್ನು ಆಲಿಸ
ಲಿಲ್ಲ. 17ಅಮ್ನೋನನು ತನ್ನ ಕಿರಿಯ ಸೇವಕನೊಬ್ಬನನ್ನು
ಕರೆದು, ‘‘ಈ ಹುಡುಗಿಯನ್ನು ಈಗಲೇ ಈ ಕೊಠಡಿ
ಯಿಂದ ಹೊರಗೆ ನೂಕು! ಅವಳು ಹೋದನಂತರ
ಬಾಗಿಲಿಗೆ ಬೀಗಹಾಕು’’ ಎಂದು ಹೇಳಿದನು.

18ಅಮ್ನೋನನ ಸೇವಕನು ತಾಮಾರಳನ್ನು ಹೊರನೂಕಿ
ಅವಳು ಹೋದನಂತರ ಬಾಗಿಲಿಗೆ ಬೀಗವನ್ನು
ಹಾಕಿದನು. ತಾಮಾರಳು ನಾನಾಬಣ್ಣದ ನಿಲುವಂಗಿ
ಯನ್ನು ಧರಿಸಿಕೊಂಡಿದ್ದಳು. ರಾಜನ ಹೆಣ್ಣುಮಕ್ಕಳು
ಕನ್ಯೆಯರಾಗಿದ್ದಾಗ ಇಂತಹ ನಿಲುವಂಗಿಗಳನ್ನು
ಧರಿಸುತ್ತಿದ್ದರು.

19ತಾಮಾರಳು ಬೂದಿಯನ್ನು ತೆಗೆದುಕೊಂಡು
ತನ್ನ ತಲೆಯ ಮೇಲೆ ಸುರಿದುಕೊಂಡು ತನ್ನ ನಿಲುವಂಗಿ
ಯನ್ನು ಹರಿದುಕೊಂಡಳು; ತನ್ನ ತಲೆಯ ಮೇಲೆ ಕೈ
ಗಳನ್ನಿಟ್ಟುಕೊಂಡು ಗಟ್ಟಿಯಾಗಿ ಗೋಳಾಡಿದಳು.

20ತಾಮಾರಳ ಸೋದರನಾದ ಅಬ್ಷಾಲೋಮನು
ತಾಮಾರಳಿಗೆ, ‘‘ನಿನ್ನ ಸೋದರನಾದ ಅಮ್ನೋನನು
ನಿನ್ನನ್ನು ಕೆಡಿಸಿಬಿಟ್ಟನಲ್ಲವೆ? ಅಮ್ನೋನನು ನಿನ್ನ
ಸೋದರ. ತಂಗಿಯೇ, ಈಗ ಸದ್ಯಕ್ಕೆ ಸುಮ್ಮನಿರು.
ಇದರಿಂದ ನೀನು ಹೆಚ್ಚು ಗಲಿಬಿಲಿಯಾಗದಿರು’’ ಎಂದು
ಹೇಳಿದನು. ತಾಮಾರಳು ಏನನ್ನೂ ಹೇಳಲಿಲ್ಲ. ಅವಳು
ಅಬ್ಷಾಲೋಮನ ಮನೆಯಲ್ಲಿ ವಾಸಿಸಲು ಹೋದಳು.

21ರಾಜನಾದ ದಾವೀದನಿಗೆ ಈ ವರ್ತಮಾನವು ತಿಳಿದು
ಬಹಳ ಕೋಪಗೊಂಡನು. 22ಅಬ್ಷಾಲೋಮನು
ಅಮ್ನೋನನನ್ನು ದ್ವೇಷಿಸಿದನು. ಅಬ್ಷಾಲೋಮನು ಒಳ್ಳೆ
ಯದನ್ನಾಗಲೀ ಕೆಟ್ಟದ್ದನ್ನಾಗಲೀ ಏನನ್ನೂ ಅಮ್ನೋನನಿಗೆ
ಹೇಳಲಿಲ್ಲ. ಅಮ್ನೋನನು ತನ್ನ ತಂಗಿಯಾದ ತಾಮಾರ
ಳನ್ನು ಕೆಡಿಸಿದ್ದಕ್ಕಾಗಿ ಅಬ್ಷಾಲೋಮನು ಅಮ್ನೋನನನ್ನು
ದ್ವೇಷಿಸಿದನು.

### ಅಬ್ಷಾಲೋಮನ ಪ್ರತೀಕಾರ

23ಎರಡು ವರ್ಷಗಳ ನಂತರ, ಅಬ್ಷಾಲೋಮನ ಕುರಿ
ಗಳ ತುಪ್ಪಟವನ್ನು ಕತ್ತರಿಸುವುದಕ್ಕಾಗಿ ಕೆಲವು ಜನರು
ಬಾಳ್‌ಹಾಚೋರಿಗೆ ಬಂದರು. ಇದನ್ನು ಬಂದು ನೋಡು
ವಂತೆ ರಾಜನ ಮಕ್ಕಳಿಗೆಲ್ಲ ಅಬ್ಷಾಲೋಮನು ಆಹ್ವಾನ
ವನ್ನು ನೀಡಿದನು. 24ಅಬ್ಷಾಲೋಮನು ರಾಜನ ಬಳಿಗೆ
ಹೋಗಿ, ‘‘ನನ್ನ ಕುರಿಗಳ ತುಪ್ಪಟವನ್ನು ಕತ್ತರಿಸಲು ಕೆಲವು
ಜನರು ಬರುತ್ತಾರೆ. ದಯವಿಟ್ಟು ನೀವು ನಿಮ್ಮ ಸೇವಕ
ರೊಂದಿಗೆ ಬಂದು ಅದನ್ನು ಗಮನಿಸಿ’’ ಎಂದನು.

25ರಾಜನಾದ ದಾವೀದನು ಅಬ್ಷಾಲೋಮನಿಗೆ,
‘‘ಮಗನೇ, ನಾವೆಲ್ಲ ಬರುವುದಿಲ್ಲ. ಅದು ನಿನಗೆ ಬಹಳ
ತೊಂದರೆಯಾಗುತ್ತದೆ’’ ಎಂದು ಹೇಳಿದನು.

ಅಬ್ಷಾಲೋಮನು ಬೇಡಿಕೊಂಡರೂ ದಾವೀದನು
ಹೋಗಲಿಲ್ಲ; ಆದರೆ ದಾವೀದನು ಅವನನ್ನು
ಆಶೀರ್ವದಿಸಿದನು.

26ಅಬ್ಷಾಲೋಮನು, ‘‘ನೀನು ಬರಲು ಇಚ್ಛೆಸದಿದ್ದರೆ,
ದಯವಿಟ್ಟು ನನ್ನ ಸೋದರನಾದ ಅಮ್ನೋನನನ್ನು
ಕಳುಹಿಸು’’ ಎಂದು ಕೇಳಿದನು.

ರಾಜನಾದ ದಾವೀದನು ಅಬ್ಷಾಲೋಮನಿಗೆ ‘‘ನಿನ್ನ
ಜೊತೆಯಲ್ಲಿ ಅವನೇಕೆ ಬರಬೇಕು?’’ ಎಂದನು.

[27]ಅಬ್ಷಾಲೋಮನು ದಾವೀದನನ್ನು ಬಹಳವಾಗಿ
ಬೇಡಿಕೊಂಡನು. ಕೊನೆಗೆ ದಾವೀದನು ಅಮ್ನೋನನನ್ನು
ಮತ್ತು ರಾಜನ ಗಂಡುಮಕ್ಕಳೆಲ್ಲರನ್ನು ಅಬ್ಷಾಲೋಮನ
ಜೊತೆಯಲ್ಲಿ ಹೋಗಲು ಹೇಳಿದನು.

### ಅಮ್ನೋನನನ್ನು ಕೊಂದುಹಾಕಿದ್ದು

[28]ಆಗ ಅಬ್ಷಾಲೋಮನು ತನ್ನ ಸೇವಕರಿಗೆ ಈ ರೀತಿ
ಆಜ್ಞೆ ಮಾಡಿದನು: ‘‘ಅಮ್ನೋನನನ್ನು ಗಮನಿಸುತ್ತಿರಿ.
ಅವನು ಮತ್ತನಾಗಿ ಆನಂದಿಸುತ್ತಿರುವಾಗ ನಾನು ಆಜ್ಞೆ
ಯನ್ನು ಕೊಡುತ್ತೇನೆ. ಆಗ ನೀವು ಅವನ ಮೇಲೆ
ಆಕ್ರಮಣಮಾಡಿ ಕೊಲ್ಲಬೇಕು. ನಿಮಗೆ ಶಿಕ್ಷೆಯಾಗುತ್ತದೆ
ಎಂಬ ಭಯವಿಲ್ಲದಿರಲಿ, ಯಾಕಂದರೆ ನೀವು ನನ್ನ ಆಜ್ಞೆ
ಯನ್ನು ಪಾಲಿಸಿದಿರಷ್ಟೇ. ಆದ್ದರಿಂದ ಶಕ್ತರಾಗಿಯೂ
ಧೈರ್ಯವಂತರಾಗಿಯೂ ಇರಿ’’ ಎಂದನು.
[29]ಅಬ್ಷಾಲೋಮನ ಯುವಕರು ಅವನ ಆಜ್ಞೆಯಂತೆ
ಅಮ್ನೋನನನ್ನು ಕೊಂದುಬಿಟ್ಟರು. ಆದರೆ ದಾವೀದನ
ಇತರ ಗಂಡುಮಕ್ಕಳು ತಪ್ಪಿಸಿಕೊಂಡರು. ಪ್ರತಿಯೊಬ್ಬನೂ
ತನ್ನ ಹೇಸರಕತ್ತೆಯನ್ನೇರಿ ತಪ್ಪಿಸಿಕೊಂಡನು.

### ಅಮ್ನೋನನ ಮರಣದ ಸುದ್ದಿಯು ದಾವೀದನಿಗೆ ಮುಟ್ಟಿತು

[30]ರಾಜನ ಗಂಡುಮಕ್ಕಳು ತಮ್ಮ ಮಾರ್ಗದಲ್ಲಿ ಬರು
ತ್ತಿರುವಾಗಲೇ ದಾವೀದನಿಗೆ ಈ ಸುದ್ದಿಯು ತಲುಪಿತು.
‘‘ಅಬ್ಷಾಲೋಮನು ರಾಜನ ಮಕ್ಕಳೆಲ್ಲರನ್ನೂ ಕೊಂದು
ಹಾಕಿದನು; ಒಬ್ಬ ಮಗನನ್ನೂ ಜೀವಂತವಾಗಿ ಬಿಟ್ಟಿಲ್ಲ’’
ಎಂಬುದೇ ಆ ಸುದ್ದಿ.
[31]ರಾಜನಾದ ದಾವೀದನು ತನ್ನ ಬಟ್ಟೆಗಳನ್ನು ಹರಿದು
ಕೊಂಡು ನೆಲದಮೇಲೆ ಬಿದ್ದನು. ದಾವೀದನ ಸುತ್ತಲೂ
ನಿಂತಿದ್ದ ಅವನ ಸೇವಕರೂ ತಮ್ಮತಮ್ಮ ಬಟ್ಟೆಗಳನ್ನು
ಹರಿದುಕೊಂಡರು.
[32]ಆದರೆ ಶಿಮ್ಮನ ಮಗನಾದ ಯೋನಾದಾಬನು
ದಾವೀದನಿಗೆ, ‘‘ರಾಜನ ಗಂಡುಮಕ್ಕಳೆಲ್ಲರನ್ನೂ
ಕೊಂದುಹಾಕಿದರೆಂದು ಯೋಚಿಸುವುದು ಸರಿಯಲ್ಲ.
ಅಮ್ನೋನನು ಮಾತ್ರ ಸತ್ತಿದ್ದಾನೆ. ಅಬ್ಷಾಲೋಮನ
ತಂಗಿಯಾದ ತಾಮಾರಳನ್ನು ಅಮ್ನೋನನು ಕೆಡಿಸಿದ್ದಕ್ಕಾಗಿ
ಅಬ್ಷಾಲೋಮನು ಆ ದಿನದಿಂದ ಅವನನ್ನು ಕೊಲ್ಲಲು
ಯೋಜನೆಮಾಡುತ್ತಿದ್ದನು. [33]ರಾಜನಾದ ನನ್ನ ಒಡೆ
ಯನೇ, ರಾಜನ ಮಕ್ಕಳೆಲ್ಲರೂ ಸತ್ತರೆಂದು ಯೋಚಿಸ
ಬೇಡ. ಅಮ್ನೋನನು ಮಾತ್ರ ಸತ್ತುಹೋದನು’’
ಎಂದನು.
[34]ಅಬ್ಷಾಲೋಮನು ಓಡಿಹೋದನು. ಆ ನಗರದ
ಗೋಡೆಯ ಮೇಲೆ ಒಬ್ಬ ಕಾವಲುಗಾರನು ನಿಂತಿದ್ದನು.
ಬೆಟ್ಟದ ಬೇರೊಂದು ಕಡೆಯಿಂದ ಅನೇಕ ಜನರು
ಬರುತ್ತಿರುವುದನ್ನು ಅವನು ನೋಡಿದನು. [35]ಯೋನಾ
ದಾಬನು ರಾಜನಾದ ದಾವೀದನಿಗೆ, ‘‘ನಾನು ಹೇಳಿದ್ದು
ಸರಿ, ಅಲ್ಲಿ ನೋಡು ರಾಜನ ಗಂಡು ಮಕ್ಕಳೆಲ್ಲರೂ
ಬರುತ್ತಿದ್ದಾರೆ’’ ಎಂದನು.
[36]ಯೋನಾದಾಬನು ಈ ಮಾತುಗಳನ್ನು ಹೇಳಿ
ಮುಗಿಸುವಷ್ಟರಲ್ಲಿ ರಾಜನ ಗಂಡುಮಕ್ಕಳೆಲ್ಲರೂ
ಬಂದರು. ಅವರು ಗಟ್ಟಿಯಾಗಿ ಅಳುತ್ತಿದ್ದರು.
ದಾವೀದನು ಮತ್ತು ಅವನ ಸೇವಕರೆಲ್ಲ ಅಳಲಾರಂಭಿ
ಸಿದರು. ಅವರೆಲ್ಲರೂ ಮತ್ತಷ್ಟು ಜೋರಾಗಿ ಗೋಳಾಡಿ
ದರು. [37]ದಾವೀದನು ಅವನ ಮಗನಿಗಾಗಿ ಪ್ರತಿ ನಿತ್ಯವೂ
ಗೋಳಾಡುತ್ತಿದ್ದನು.

### ಅಬ್ಷಾಲೋಮನು ಗೆಷೂರಿಗೆ ತಪ್ಪಿಸಿಕೊಂಡು ಹೋದದ್ದು

ಗೆಷೂರಿನ ರಾಜನೂ ಅಮ್ಮೀಹೂದನ ಮಗನೂ ಆದ
ತಲ್ಮೈನ* ಹತ್ತಿರಕ್ಕೆ ಅಬ್ಷಾಲೋಮನು ಓಡಿಹೋದನು.
[38]ಅಬ್ಷಾಲೋಮನು ಗೆಷೂರಿಗೆ ಓಡಿಹೋದ ನಂತರ,
ಅಲ್ಲಿ ಅವನು ಮೂರು ವರ್ಷಗಳ ಕಾಲ ನೆಲೆಸಿದನು.
[39]ಅಮ್ನೋನನ ಮರಣದ ವಿಷಯದಲ್ಲಿ ರಾಜನಾದ
ದಾವೀದನು ಸಂತೈಸಿಕೊಂಡನು. ಆದರೆ ಅವನು ಅಬ್ಷಾ
ಲೋಮನನ್ನು ಕಾಣಲು ಹಾತೊರೆಯ ತೊಡಗಿದನು.

### ದಾವೀದನ ಬಳಿಗೆ ಒಬ್ಬ ಬುದ್ಧಿವಂತಳಾದ ಸ್ತ್ರೀಯನ್ನು ಕಳುಹಿಸಿದ್ದು

14 ರಾಜನಾದ ದಾವೀದನಿಗೆ ಅಬ್ಷಾಲೋಮನ
ಅಗಲಿಕೆಯಿಂದಾದ ಯಾತನೆಯು ಚೆರೂಯಳ
ಮಗನಾದ ಯೋವಾಬನಿಗೆ ತಿಳಿಯಿತು. [2]ಆದ್ದರಿಂದ
ಯೋವಾಬನು ಒಬ್ಬ ಬುದ್ಧಿವಂತ ಸ್ತ್ರೀಯನ್ನು ತೆಕೋವ
ದಿಂದ ಕರೆತರಲು ಸಂದೇಶಕರನ್ನು ಅಲ್ಲಿಗೆ ಕಳುಹಿಸಿದನು.
ಈ ಬುದ್ಧಿವಂತಳಾದ ಸ್ತ್ರೀಗೆ ಯೋವಾಬನು, ‘‘ದಯ
ವಿಟ್ಟು ನಿನ್ನ ಚರ್ಮಕ್ಕಾಗಲೀ ತಲೆಕೂದಲಿಗಾಗಲೀ
ಎಣ್ಣೆಯನ್ನು ಹಚ್ಚಿಕೊಳ್ಳಬೇಡ; ಚೆನ್ನಾಗಿರುವ ವಸ್ತ್ರಗಳನ್ನು
ತೊಟ್ಟುಕೊಳ್ಳದೆ ಶೋಕಸೂಚಕ ವಸ್ತ್ರಗಳನ್ನು ಧರಿಸಿಕೋ.
ಸತ್ತವನಿಗಾಗಿ ಅನೇಕ ದಿನಗಳಿಂದ ರೋಧಿಸುತ್ತಿರುವ
ಸ್ತ್ರೀಯಂತೆ ನಟಿಸು. [3]ರಾಜನ ಬಳಿಗೆ ಹೋಗಿ, ನಾನು
ಹೇಳಿಕೊಟ್ಟ ಮಾತುಗಳನ್ನು ಅವನಿಗೆ ಹೇಳು’’ಎಂದು
ಹೇಳಿದನು. ಬುದ್ಧಿವಂತಳಾದ ಆ ಸ್ತ್ರೀಯು ಏನು ಮಾತ
ನಾಡಬೇಕೆಂಬುದನ್ನು ಯೋವಾಬನು ಹೇಳಿಕೊಟ್ಟನು.
[4]ತೆಕೋವದ ಆ ಸ್ತ್ರೀಯು ರಾಜನ ಬಳಿಗೆ ಬಂದಾಗ
ಅವನಿಗೆ ಸಾಷ್ಟಾಂಗ ನಮಸ್ಕಾರ ಮಾಡಿ, ‘‘ರಾಜನೇ, ನನಗೆ
ಸಹಾಯ ಮಾಡು’’ ಎಂದು ಹೇಳಿದಳು.

---

**ಗೆಷೂರಿನ … ತಲ್ಮೈ** ಅಬ್ಷಾಲೋಮನ ಅಜ್ಜ ತಲ್ಮೈ

5ರಾಜನಾದ ದಾವೀದನು ಅವಳಿಗೆ, ‘‘ನಿನ್ನ ಸಮಸ್ಯೆ
ಏನು?’’ಎಂದು ಕೇಳಿದನು.
ಆ ಸ್ತ್ರೀಯು, ‘‘ನಾನೊಬ್ಬ ವಿಧವೆ. ನನ್ನ ಗಂಡನು ತೀರಿ
ಕೊಂಡಿದ್ದಾನೆ. 6ನನಗೆ ಇಬ್ಬರು ಗಂಡು ಮಕ್ಕಳಿದ್ದರು. ಈ
ಇಬ್ಬರು ಗಂಡು ಮಕ್ಕಳು ಜಗಳ ಮಾಡುತ್ತಾ ಹೊರಗೆ
ಮೈದಾನದಲ್ಲಿದ್ದರು. ಅವರನ್ನು ತಡೆಯುವ ಬೇರೊಬ್ಬನು
ಅಲ್ಲಿರಲಿಲ್ಲ. ಒಬ್ಬ ಮಗನು ಮತ್ತೊಬ್ಬನನ್ನು ಕೊಂದನು.
7ಈಗ ನಮ್ಮ ಕುಟುಂಬದವರೆಲ್ಲಾ ನನಗೆ ವಿರುದ್ಧ
ವಾಗಿದ್ದಾರೆ. ಅವರು ನನಗೆ, ‘ತನ್ನ ಸೋದರನನ್ನೇ ಕೊಂದ
ಮಗನನ್ನು ಕರೆದುಕೊಂಡು ಬಾ. ಅವನು ತನ್ನ ಸೋದರ
ನನ್ನೇ ಕೊಂದುಹಾಕಿದ್ದರಿಂದ ಅವನನ್ನು ನಾವು ಕೊಂದು
ಹಾಕುತ್ತೇವೆ’ ಎಂದು ಹೇಳಿದರು. ನನ್ನ ಮಗನನ್ನು
ಕೊಲ್ಲಲು ನಾನು ಅವರಿಗೆ ಬಿಟ್ಟುಕೊಟ್ಟರೆ, ತನ್ನ ತಂದೆಯ
ಆಸ್ತಿಗೆ ವಾರಸುದಾರನಾದ ಮಗನನ್ನೇ ಕೊಂದು ಹಾಕಿ
ದಂತಾಗುತ್ತದೆ. ನನ್ನ ಮಗ ನನ್ನ ಬದುಕಿನ ಕೊನೆಯ
ಆಶಾಕಿರಣ. ಆ ಕೊನೆಯ ಆಶಾಕಿರಣವು ಸುಟ್ಟು ನಾಶ
ವಾಗಿಬಿಡುತ್ತದೆ. ನಂತರ ನನ್ನ ಸತ್ತ ಗಂಡನ ಆಸ್ತಿ
ಬೇರೊಬ್ಬನಿಗೆ ಹೋಗುತ್ತದೆ ಮತ್ತು ಅವನ ಹೆಸರು ದೇಶ
ದೊಳಗಿಂದ ತೆಗೆದುಹಾಕಲ್ಪಡುತ್ತದೆ’’ ಎಂದು ಹೇಳಿದಳು.
8ಆಗ ರಾಜನು ಆ ಸ್ತ್ರೀಗೆ, ‘‘ಮನೆಗೆ ಹಿಂದಿರುಗು. ನಾನು
ನಿನ್ನ ವಿಷಯದಲ್ಲಿ ಆಜ್ಞೆಗಳನ್ನು ಕೊಡುತ್ತೇನೆ’’ ಎಂದು
ಹೇಳಿದನು.
9ತೆಕೋವದ ಆ ಸ್ತ್ರೀಯು ರಾಜನಿಗೆ, ‘‘ರಾಜನಾದ ನನ್ನ
ಒಡೆಯನೇ, ದೋಷವೆಲ್ಲವೂ ನನ್ನ ಮೇಲೆಯೇ ಬರಲಿ.
ನನ್ನ ಒಡೆಯನಾದ ರಾಜನೇ, ನೀನೂ ನಿನ್ನ ರಾಜ್ಯವೂ
ನಿರ್ದೋಷಿಗಳಾಗಿದ್ದೀರಿ’’ ಎಂದು ಹೇಳಿದಳು.
10ರಾಜನಾದ ದಾವೀದನು, ‘‘ನಿನ್ನನ್ನು ದೋಷಿ ಎಂದವ
ರನ್ನು ನನ್ನ ಬಳಿಗೆ ಕರೆದುಕೊಂಡು ಬಾ. ಅವನು ನಿನಗೆ
ಮತ್ತೆ ತೊಂದರೆ ಕೊಡದಂತೆ ನಾನು ನೋಡಿಕೊಳ್ಳುವೆ’’
ಎಂದು ಹೇಳಿದನು.
11ಆ ಸ್ತ್ರೀಯು, ‘‘ಅವರು ನನಗೆ ತೊಂದರೆ ಕೊಡದಂತೆ
ನೀನು ನೋಡಿಕೊಳ್ಳುವುದಾಗಿ ನಿನ್ನ ದೇವರಾದ
ಯೆಹೋವನ ಮೇಲೆ ದಯವಿಟ್ಟು ಪ್ರಮಾಣ ಮಾಡು.
ಆಗ ಕೊಲೆಗಾರರನ್ನು ದಂಡಿಸಲು ಇಚ್ಛಿಸುವ ಈ ಜನರು,
ನನ್ನ ಮಗನನ್ನು ದಂಡಿಸುವುದಿಲ್ಲ’’ ಎಂದು ಹೇಳಿದಳು.
ದಾವೀದನು, ‘‘ಯೆಹೋವನಾಣೆ, ನಿನ್ನ ಮಗನನ್ನು
ಯಾವ ವ್ಯಕ್ತಿಯೂ ತೊಂದರೆಗೊಳಿಸುವುದಿಲ್ಲ. ನಿನ್ನ
ಮಗನ ತಲೆಯ ಮೇಲಿನ ಕೂದಲುಗಳಲ್ಲಿ ಒಂದಾದರೂ
ನೆಲಕ್ಕೆ ಬೀಳುವುದಿಲ್ಲ’’ ಎಂದನು.
12ಆ ಸ್ತ್ರೀಯು, ‘‘ರಾಜನಾದ ನನ್ನ ಒಡೆಯನೇ, ದಯ
ವಿಟ್ಟು ನಾನು ನಿನಗೆ ಕೆಲವು ಮಾತುಗಳನ್ನು ಹೇಳಲು
ಬಿಡು’’ ಎಂದಳು. ‘‘ಹೇಳು’’ ಎಂದು ರಾಜನು
ಹೇಳಿದನು.
13ಆಗ ಆ ಸ್ತ್ರೀಯು, ‘‘ದೇವರ ಜನರ ವಿರುದ್ಧವಾಗಿ
ನೀನು ಈ ಕಾರ್ಯಗಳನ್ನು ಮಾಡಲು ಯೋಚಿಸಿರುವು
ದಾದರೂ ಏಕೆ? ಹೌದು, ನೀನು ಕೊಟ್ಟ ತೀರ್ಪಿನ
ಮೂಲಕ ನೀನು ನಿನ್ನನ್ನು ತಪ್ಪಿತಸ್ಥನೆಂದು ತೋರಿಸಿ
ಕೊಟ್ಟಿರುವೆ. ಏಕೆಂದರೆ ನೀನು ಬಲಾತ್ಕಾರದಿಂದ ಮನೆ
ಬಿಡಿಸಿದ ಮಗನನ್ನು ಮನೆಗೆ ಕರೆದುತಂದಿಲ್ಲ. 14ನಾವೆಲ್ಲ
ಎಂದಾದರೂ ಒಂದು ದಿನ ಸಾಯುತ್ತೇವೆ ಎನ್ನುವುದು
ನಿಜ. ನಾವೆಲ್ಲ ನೆಲದ ಮೇಲೆ ಚೆಲ್ಲಿದ ನೀರಿನಂತಿದ್ದೇವೆ.
ಈ ನೀರನ್ನು ನೆಲದಿಂದ ಮತ್ತೆ ಒಟ್ಟುಗೂಡಿಸುವುದು
ಯಾವ ವ್ಯಕ್ತಿಯಿಂದಲೂ ಸಾಧ್ಯವಿಲ್ಲ. ಆದರೆ ಜೀವವನ್ನು
ತೆಗೆದುಬಿಡಲು ದೇವರು ಇಚ್ಛಿಸುವುದಿಲ್ಲ. ಬಲಾತ್ಕಾರ
ವಾಗಿ ಹೊರಗೆ ನೂಕಲ್ಪಟ್ಟವನು ತಿರುಗಿ ತನ್ನ ಬಳಿಗೆ
ಬರುವ ಹಾಗೆ ಆತನದೇ ಆದ ಉಪಾಯವಿದೆ. 15ರಾಜ
ನಾದ ನನ್ನ ಒಡೆಯನೇ, ನಾನು ಈ ಮಾತುಗಳನ್ನು ನಿನಗೆ
ಹೇಳುವುದಕ್ಕೆಂದೇ ಬಂದೆನು. ಏಕೆಂದರೆ ಜನರು ನನ್ನನ್ನು
ಹೆದರಿಸಿದರು. ನಾನು ನನ್ನೊಳಗೆ ಹೀಗೆಂದುಕೊಂಡೆನು:
‘ನಾನು ರಾಜನೊಂದಿಗೆ ಮಾತಾಡುತ್ತೇನೆ. ಬಹುಶಃ
ರಾಜನು ನನ್ನ ಮಾತುಗಳನ್ನು ಕೇಳಿ ಸಹಾಯ ಮಾಡ
ಬಹುದು.16ರಾಜನು ನನ್ನನ್ನೂ ನನ್ನ ಮಗನನ್ನೂ
ಕೊಲ್ಲಲು ಇಚ್ಛಿಸುವ ವ್ಯಕ್ತಿಯಿಂದ ನಮ್ಮಿಬ್ಬರನ್ನೂ ರಕ್ಷಿಸ
ಬಹುದು; ದೇವರು ನಮಗೆ ಕೊಟ್ಟಿರುವ ಸ್ವಾಸ್ತ್ಯವನ್ನು
ನಮ್ಮಿಂದ ಕಸಿದುಕೊಳ್ಳದಂತೆ ಕಾಪಾಡಬಹುದು. 17ರಾಜ
ನಾದ ನನ್ನ ಒಡೆಯನ ಮಾತುಗಳು ನನಗೆ ವಿಶ್ರಾಂತಿ
ಯನ್ನು ಕೊಡುತ್ತವೆ ಎಂದು ನನಗೆ ತಿಳಿದಿರುವುದರಿಂದ
ನಿನ್ನ ಬಳಿಗೆ ಬಂದಿರುವೆನು. ಏಕೆಂದರೆ ನೀನು ದೇವ
ದೂತನಂತಿರುವೆ. ಯಾವುದು ಒಳ್ಳೆಯದು, ಯಾವುದು
ಕೆಟ್ಟದ್ದು ಎಂಬುದು ನಿನಗೆ ತಿಳಿದಿದೆ. ನಿನ್ನ ದೇವರಾದ
ಯೆಹೋವನು ನಿನ್ನೊಂದಿಗಿರುವನು’’ ಎಂದು
ಹೇಳಿದಳು.

18ರಾಜನಾದ ದಾವೀದನು ಆ ಸ್ತ್ರೀಗೆ, ‘‘ನಾನು ಕೇಳುವ
ಪ್ರಶ್ನೆಗೆ ನೀನು ಉತ್ತರವನ್ನು ಹೇಳಲೇಬೇಕು’’ ಎಂದು
ಉತ್ತರಿಸಿದನು.

ಆ ಸ್ತ್ರೀಯು, ‘‘ರಾಜನಾದ ನನ್ನ ಒಡೆಯನೇ,
ದಯವಿಟ್ಟು ನಿನ್ನ ಪ್ರಶ್ನೆಯನ್ನು ಕೇಳು’’ಎಂದಳು.

19ರಾಜನು, ‘‘ಈ ವಿಚಾರಗಳನ್ನೆಲ್ಲ ಹೇಳಲು
ಯೋವಾಬನು ನಿನಗೆ ತಿಳಿಸಿದನಲ್ಲವೇ?’’ಎಂದನು.

ಆ ಸ್ತ್ರೀಯು, ‘‘ರಾಜನಾದ ನನ್ನ ಒಡೆಯನೇ, ನಿಮ್ಮ
ಆಣೆಯಾಗಿಯೂ, ನೀವು ಹೇಳಿದ್ದು ಸರಿ!’’

ನಿಮ್ಮ ಸೇವಕನಾದ ಯೋವಾಬನು ಈ ವಿಷಯಗಳನ್ನು
ಹೇಳಲು ನನಗೆ ತಿಳಿಸಿದನು. 20ಈ ವಿಷಯಗಳ ಬಗ್ಗೆ ನಿಮ್ಮ
ದೃಷ್ಟಿಯು ಬದಲಾಗಲೆಂಬುದಕ್ಕಾಗಿ ಯೋವಾಬನು

ಹೀಗೆ ಮಾಡಿದನು. ನನ್ನ ಒಡೆಯನೇ, ನೀನು ದೇವದೂತ
ನಂತೆ ಬುದ್ಧಿವಂತನಾಗಿರುವೆ. ಈ ಲೋಕದಲ್ಲಿ ನಡೆಯು
ತ್ತಿರುವುದೆಲ್ಲವನ್ನೂ ನೀನು ತಿಳಿದಿರುವೆ''ಎಂದಳು.

### ಅಬ್ಷಾಲೋಮನು ಜೆರುಸಲೇಮಿಗೆ ಹಿಂದಿರುಗಿದ್ದು

21ರಾಜನು ಯೋವಾಬನಿಗೆ, ''ನೀನು ಕೇಳಿ
ಕೊಂಡದ್ದನ್ನು ಅನುಗ್ರಹಿಸಿದ್ದೇನೆ. ಈಗ ಯುವಕನಾದ
ಅಬ್ಷಾಲೋಮನನ್ನು ಹಿಂದಕ್ಕೆ ಕರೆದುಕೊಂಡು ಬಾ''
ಎಂದು ಹೇಳಿದನು.
22ಯೋವಾಬನು ಅರಸನಾದ ದಾವೀದನಿಗೆ ಸಾಷ್ಟಾಂಗ
ನಮಸ್ಕಾರಮಾಡಿ, ''ನಾನು ಕೇಳಿಕೊಂಡದ್ದನ್ನು ನೀನು
ನೆರವೇರಿಸಿದ್ದರಿಂದ, ನೀನು ನನ್ನ ವಿಷಯದಲ್ಲಿ
ಸಂತೋಷದಿಂದಿರುವೆ ಎಂಬುದು ಇಂದು ನನಗೆ
ಗೊತ್ತಾಯಿತು'' ಎಂದನು.
23ನಂತರ ಯೋವಾಬನು ಮೇಲೆದ್ದು ಗೆಷೂರಿಗೆ
ಹೋಗಿ ಅಬ್ಷಾಲೋಮನನ್ನು ಜೆರುಸಲೇಮಿಗೆ ಕರೆದು
ತಂದನು. 24ಆದರೆ ರಾಜನಾದ ದಾವೀದನು,
''ಅಬ್ಷಾಲೋಮನು ತನ್ನ ಸ್ವಂತ ಮನೆಗೆ ಹಿಂದಿರುಗಿ
ಹೋಗಲಿ. ಅವನು ನನ್ನನ್ನು ನೋಡಲು ಬರುವುದು
ಬೇಡ'' ಎಂದನು. ಆದುದರಿಂದ ಅಬ್ಷಾಲೋಮನು ತನ್ನ
ಸ್ವಂತ ಮನೆಗೆ ಹಿಂದಿರುಗಿಹೋದನು. ಅಬ್ಷಾಲೋಮನು
ರಾಜನನ್ನು ನೋಡಲು ಹೋಗಲಿಲ್ಲ.
25ಜನರು ಅಬ್ಷಾಲೋಮನನ್ನು, ಅವನ ಸುಂದರ
ರೂಪಕ್ಕಾಗಿ ಬಹಳ ಹೊಗಳುತ್ತಿದ್ದರು. ಇಸ್ರೇಲಿನಲ್ಲಿ
ಅವನಷ್ಟು ರೂಪವಂತನು ಬೇರೆ ಯಾರೂ ಇರಲಿಲ್ಲ.
ಅಬ್ಷಾಲೋಮನ ತಲೆಯಿಂದ ಪಾದಗಳವರೆಗೆ ಯಾವ
ಕಳಂಕವೂ ಇರಲಿಲ್ಲ. 26ಪ್ರತಿ ವರ್ಷಾಂತ್ಯದಲ್ಲಿಯೂ
ಅಬ್ಷಾಲೋಮನು ತನ್ನ ತಲೆಗೂದಲನ್ನು ಕತ್ತರಿಸಿ ಅದನ್ನು
ತೂಕ ಮಾಡಿಸುತ್ತಿದ್ದನು. ಅವನ ತಲೆಗೂದಲು ಐದು
ಪೌಂಡುಗಳಷ್ಟು ಭಾರವಾಗಿರುತ್ತಿತ್ತು. 27ಅಬ್ಷಾಲೋಮ
ನಿಗೆ ಮೂವರು ಗಂಡುಮಕ್ಕಳು ಮತ್ತು ಒಬ್ಬ ಮಗಳು
ಇದ್ದರು. ಮಗಳ ಹೆಸರು ತಾಮಾರ್. ತಾಮಾರಳು
ಸುಂದರಳಾಗಿದ್ದಳು.

### ಯೋವಾಬನು ಬಂದು ತನ್ನನ್ನು ನೋಡಬೇಕೆಂದು ಅಬ್ಷಾಲೋಮನು ಒತ್ತಾಯಿಸಿದ್ದು

28ಅಬ್ಷಾಲೋಮನು ಎರಡು ವರ್ಷಗಳ ಕಾಲ ಜೆರು
ಸಲೇಮಿನಲ್ಲಿ ಇದ್ದನು. ಆದರೂ ರಾಜನಾದ ದಾವೀದ
ನನ್ನು ಭೇಟಿಯಾಗಲು ಅವನಿಗೆ ಅವಕಾಶ ದೊರಕಲಿಲ್ಲ.
29ಆದ್ದರಿಂದ ಅಬ್ಷಾಲೋಮನು ಯೋವಾಬನ ಬಳಿಗೆ
ಸಂದೇಶಕರನ್ನು ಕಳುಹಿಸಿದನು. ಅಬ್ಷಾಲೋಮನನ್ನು
ರಾಜನ ಹತ್ತಿರಕ್ಕೆ ಕಳುಹಿಸಿಕೊಡುವಂತೆ ಈ ಸಂದೇಶಕರು
ಯೋವಾಬನನ್ನು ಕೇಳಿದರು. ಆದರೆ ಯೋವಾಬನು
ಅಬ್ಷಾಲೋಮನ ಬಳಿಗೆ ಬರಲಿಲ್ಲ. ಅಬ್ಷಾಲೋಮನು
ಎರಡನೆಯ ಬಾರಿ ಸಂದೇಶವನ್ನು ಕಳುಹಿಸಿದನು.
ಆದರೂ ಯೋವಾಬನು ಬರಲಿಲ್ಲ.
30ಆಗ ಅಬ್ಷಾಲೋಮನು ತನ್ನ ಸೇವಕರಿಗೆ, ''ನೋಡಿ,
ನನ್ನ ಹೊಲದ ಪಕ್ಕದಲ್ಲಿ ಯೋವಾಬನ ಹೊಲವಿದೆ.
ಅವನು ಆ ಹೊಲದಲ್ಲಿ ಜವೆಗೋಧಿಯನ್ನು ಬೆಳೆದಿದ್ದಾನೆ.
ಹೋಗಿ ಆ ಜವೆಗೋಧಿಯನ್ನು ಸುಟ್ಟುಬಿಡಿ''ಎಂದು
ಹೇಳಿದನು.

ಅಬ್ಷಾಲೋಮನ ಸೇವಕರು ಹೋಗಿ ಯೋವಾಬನ
ಹೊಲದಲ್ಲಿ ಬೆಂಕಿಯನ್ನು ಹಚ್ಚಿದರು. 31ಆಗ
ಯೋವಾಬನು ಅಬ್ಷಾಲೋಮನ ಮನೆಗೆ ಬಂದನು.
ಯೋವಾಬನು ಅಬ್ಷಾಲೋಮನಿಗೆ, ''ನಿನ್ನ ಸೇವಕರು
ನನ್ನ ಹೊಲವನ್ನು ಏಕೆ ಸುಟ್ಟರು? ''ಎಂದು ಕೇಳಿದನು.
32 ಅಬ್ಷಾಲೋಮನು ಯೋವಾಬನಿಗೆ, ''ನಾನು ನಿನಗೆ
ಸಂದೇಶವನ್ನು ಕಳುಹಿಸಿ ಇಲ್ಲಿಗೆ ಬರಲು ಹೇಳಿ ಕಳು
ಹಿಸಿದ್ದೆನು. ರಾಜನ ಬಳಿಗೆ ನಿನ್ನನ್ನು ಕಳುಹಿಸಲು ನಾನು
ಅಪೇಕ್ಷಿಸಿದೆನು. ಗೆಷೂರಿನಿಂದ ನನ್ನನ್ನು ಮನೆಗೆ ಕರೆಸಲು
ಅವನು ಇಚ್ಛಿಸಿದ್ದು ಏಕೆ ಎಂಬುದನ್ನು ನೀನು ಕೇಳ
ಬೇಕೆಂದು ನಾನು ಅಪೇಕ್ಷಿಸಿದೆನು. ನಾನು ಅವನನ್ನು
ನೋಡಲಾಗದಿದ್ದರೆ ಗೆಷೂರಿನಲ್ಲಿ ವಾಸಿಸುವುದೇ ನನಗೆ
ಚೆನ್ನಾಗಿರುತ್ತಿತ್ತು. ಈಗ ರಾಜನನ್ನು ನೋಡಲು ನನಗೆ
ಅವಕಾಶವನ್ನು ಕೊಡು. ನಾನು ಪಾಪವನ್ನು ಮಾಡಿದ್ದರೆ
ಅವನು ನನ್ನನ್ನು ಕೊಂದುಬಿಡಲಿ!'' ಎಂದನು.

### ರಾಜನಾದ ದಾವೀದನನ್ನು ಅಬ್ಷಾಲೋಮನು ಭೇಟಿಮಾಡಿದ್ದು

33ಯೋವಾಬನು ರಾಜನ ಬಳಿಗೆ ಬಂದು
ಅಬ್ಷಾಲೋಮನು ಹೇಳಿದ್ದನ್ನೆಲ್ಲ ತಿಳಿಸಿದನು. ರಾಜನು
ಅಬ್ಷಾಲೋಮನನ್ನು ಕರೆಸಿದನು. ಅಬ್ಷಾಲೋಮನು
ರಾಜನ ಬಳಿಗೆ ಬಂದನು. ರಾಜನ ಎದುರಿನಲ್ಲಿ
ಅಬ್ಷಾಲೋಮನು ಸಾಷ್ಟಾಂಗ ನಮಸ್ಕಾರ ಮಾಡಿದನು.
ರಾಜನು ಅಬ್ಷಾಲೋಮನಿಗೆ ಮುದ್ದಿಟ್ಟನು.

### ಅಬ್ಷಾಲೋಮನಿಗೆ ಅನೇಕರು ಸ್ನೇಹಿತರಾದದ್ದು

15 ಇದಾದನಂತರ, ಅಬ್ಷಾಲೋಮನು ತನಗಾಗಿ
ರಥವನ್ನೂ ಕುದುರೆಗಳನ್ನೂ ಪಡೆದನು. ಅವನು
ರಥವನ್ನು ನಡೆಸುವಾಗ ಅವನ ಮುಂದೆ ಓಡಲು ಐವತ್ತು
ಜನರಿದ್ದರು. 2ಅಬ್ಷಾಲೋಮನು ಹೊತ್ತಾರೆಯಲ್ಲಿಯೇ
ಎದ್ದು ದ್ವಾರದ* ಹತ್ತಿರದಲ್ಲಿ ನಿಂತುಕೊಳ್ಳುತ್ತಿದ್ದನು.
ತೊಂದರೆಯಲ್ಲಿ ಸಿಕ್ಕಿಕೊಂಡಿರುವ ಯಾವನಾದರೂ

---

**ದ್ವಾರ** ಜನರು ತಮ್ಮ ಎಲ್ಲಾ ವ್ಯವಹಾರಗಳನ್ನು ಮಾಡಲು ಬಂದು ಸೇರುವ ಸ್ಥಳ. ನ್ಯಾಯಸ್ಥಾನದ ಅನೇಕ ಮೊಕದ್ದಮೆಗಳು ನಡೆಯುವ ಸ್ಥಳವೂ ಇದೇ.

ತೀರ್ಪಿಗಾಗಿ ರಾಜನಾದ ದಾವೀದನ ಬಳಿಗೆ ಹೋಗು
ತ್ತಿರುವುದನ್ನು ಅಬ್ಷಾಲೋಮನು ಕಂಡರೆ ಅವನನ್ನು ತನ್ನ
ಬಳಿಗೆ ಕರೆಯುತ್ತಿದ್ದನು. ಅಬ್ಷಾಲೋಮನು, ''ನೀನು
ಯಾವ ನಗರದಿಂದ ಬಂದೆ?'' ಎಂದು ಕೇಳುತ್ತಿದ್ದನು. ಆ
ಮನುಷ್ಯನು, ''ನಾನು ಇಸ್ರೇಲಿನ ಇಂಥ ಕುಲಕ್ಕೆ ಸೇರಿ
ದವನು'' ಎಂದು ಉತ್ತರಿಸುತ್ತಿದ್ದನು. 3ಆಗ ಅಬ್ಷಾಲೋ
ಮನು ಆ ಮನುಷ್ಯನಿಗೆ, ''ನೋಡು, ನಿನ್ನ ಬೇಡಿಕೆಗಳು
ಸರಿಯಾಗಿವೆ. ಆದರೆ ರಾಜನಾದ ದಾವೀದನು ನಿನ್ನ
ಮಾತುಗಳನ್ನು ಕೇಳುವುದಿಲ್ಲ'' ಎಂದು ಹೇಳುತ್ತಿದ್ದನು.

4ಅಲ್ಲದೆ ಅಬ್ಷಾಲೋಮನು, ''ಯಾರಾದರೂ ನನ್ನನ್ನು
ಈ ದೇಶದಲ್ಲಿ ನ್ಯಾಯಾಧೀಶನನ್ನಾಗಿ ಮಾಡಿದ್ದರೆ ಒಳ್ಳೆಯ
ದಾಗುತ್ತಿತ್ತು. ತೀರ್ಪಿಗಾಗಿ ತಮ್ಮ ತೊಂದರೆಗಳೊಂದಿಗೆ
ಬರುವ ಪ್ರತಿಯೊಬ್ಬನಿಗೂ ಆಗ ನಾನು ಸಹಾಯ
ಮಾಡಬಹುದಾಗಿತ್ತು. ಅವನ ತೊಂದರೆಗೆ ತೃಪ್ತಿಕರವಾದ
ಪರಿಹಾರವನ್ನು ನೀಡಲು ನಾನು ಸಹಾಯ ಮಾಡಬಹು
ದಾಗಿತ್ತು'' ಎಂದು ಹೇಳುತ್ತಿದ್ದನು.

5ಯಾವನಾದರೂ ಅಬ್ಷಾಲೋಮನ ಹತ್ತಿರಕ್ಕೆ ಬಂದು
ಸಾಷ್ಟಾಂಗ ನಮಸ್ಕಾರಮಾಡಲು ಬಾಗಿದಾಗ, ಅಬ್ಷಾ
ಲೋಮನು ಕೈಚಾಚಿ ಅವನನ್ನು ಅಪ್ಪಿಕೊಂಡು ಮುದ್ದಿಡು
ತ್ತಿದ್ದನು. 6ರಾಜನಾದ ದಾವೀದನ ಬಳಿಗೆ ತೀರ್ಪಿಗಾಗಿ
ಬರುವ ಎಲ್ಲಾ ಇಸ್ರೇಲರಿಗೆ ಅಬ್ಷಾಲೋಮನು ಇದೇ
ರೀತಿ ಮಾಡುತ್ತಿದ್ದನು. ಹೀಗೆ, ಅಬ್ಷಾಲೋಮನು
ಇಸ್ರೇಲಿನ ಜನರೆಲ್ಲರ ಹೃದಯಗಳನ್ನು ಗೆದ್ದುಕೊಂಡನು.

### ದಾವೀದನ ರಾಜ್ಯಾಧಿಕಾರವನ್ನು ಪಡೆದುಕೊಳ್ಳಲು ಅಬ್ಷಾಲೋಮನ ಆಲೋಚನೆ

7ನಾಲ್ಕು ವರ್ಷಗಳ ಬಳಿಕ* ಅಬ್ಷಾಲೋಮನು ರಾಜ
ನಾದ ದಾವೀದನಿಗೆ, ''ನಾನು ಹೆಬ್ರೋನಿನಲ್ಲಿ
ಯೆಹೋವನೊಂದಿಗೆ ಮಾಡಿದ ವಿಶೇಷ ಪ್ರಮಾಣವನ್ನು
ಪೂರ್ಣಗೊಳಿಸುವುದಕ್ಕೆ ದಯವಿಟ್ಟು ಅನುಮತಿಕೊಡು.
8ನಾನು ಅರಾಮಿನ ಗೆಷೂರಿನಲ್ಲಿ ನೆಲೆಸಿದ್ದಾಗ,
'ಯೆಹೋವನು ನನ್ನನ್ನು ಜೆರುಸಲೇಮಿಗೆ ಮತ್ತೆ ಕರೆಸಿ
ಕೊಂಡರೆ, ನಾನು ಯೆಹೋವನ ಆರಾಧನೆ ಮಾಡುತ್ತೇನೆ,
ಎಂಬ ವಿಶೇಷ ಪ್ರಮಾಣವನ್ನು ಮಾಡಿದ್ದೆನು'' ಎಂದನು.
9''ಸಮಾಧಾನದಿಂದ ಹೋಗು'' ಎಂದು ರಾಜನಾದ
ದಾವೀದನು ಹೇಳಿದನು.

ಅಬ್ಷಾಲೋಮನು ಹೆಬ್ರೋನಿಗೆ ಹೋದನು. 10ಆದರೆ
ಅಬ್ಷಾಲೋಮನು ಇಸ್ರೇಲಿನ ಎಲ್ಲಾ ಕುಲಗಳಿಗೂ ಗೂಢ
ಚಾರರನ್ನು ಕಳುಹಿಸಿದನು. ಈ ಗೂಢಚಾರರು ಜನರಿಗೆ,
''ನೀವು ಕಹಳೆಯ ಧ್ವನಿಯನ್ನು ಕೇಳಿದಾಗ,
'ಅಬ್ಷಾಲೋಮನು ಹೆಬ್ರೋನಿನಲ್ಲಿ ರಾಜನಾದ' ನೆಂದು
ಹೇಳಿ'' ಎಂಬುದಾಗಿ ತಿಳಿಸಿದರು.

11ಅಬ್ಷಾಲೋಮನು ತನ್ನೊಂದಿಗೆ ಬರಲು ಇನ್ನೂರು
ಜನರನ್ನು ಆಹ್ವಾನಿಸಿದನು. ಆ ಜನರು ಜೆರುಸಲೇಮನ್ನು
ಬಿಟ್ಟು ಅವನೊಂದಿಗೆ ಹೊರಟರು. ಆದರೆ ಅವನು
ಯೋಚಿಸಿದ ಕಾರ್ಯವು ಅವರಿಗೆ ತಿಳಿದಿರಲಿಲ್ಲ.
12ಅಹೀತೋಫೆಲನೆಂಬವನು ದಾವೀದನ ಸಲಹೆಗಾರ
ರಲ್ಲಿ ಒಬ್ಬನಾಗಿದ್ದನು. ಅಹೀತೋಫೆಲನು ಗೀಲೋವ
ಎಂಬ ಪಟ್ಟಣದವನು. ಅಬ್ಷಾಲೋಮನು ಯಜ್ಞಗಳನ್ನು
ಅರ್ಪಿಸುತ್ತಿರುವಾಗ ಅಹೀತೋಫೆಲನನ್ನು ಅವನ ನಗರ
ದಿಂದ (ಗೀಲೋವ) ಕರೆಯಿಸಿದನು. ಜನರು
ಅಬ್ಷಾಲೋಮನನ್ನು ಕೂಡಿಕೊಳ್ಳುತ್ತಾ ಬಂದದ್ದರಿಂದ
ಅವನು ಮಾಡಿದ ಒಳಸಂಚು ಸಫಲವಾಗತೊಡಗಿತು.

### ಅಬ್ಷಾಲೋಮನ ಯೋಜನೆಗಳ ಬಗ್ಗೆ ದಾವೀದನಿಗೆ ತಿಳಿದದ್ದು

13ಒಬ್ಬನು ದಾವೀದನಿಗೆ ಸುದ್ದಿಯನ್ನು ಹೇಳಲು ಒಳಗೆ
ಬಂದು, ''ಇಸ್ರೇಲಿನ ಜನರು ಅಬ್ಷಾಲೋಮನನ್ನು
ಹಿಂಬಾಲಿಸಲಾರಂಭಿಸಿದ್ದಾರೆ'' ಎಂದು ಹೇಳಿದನು.

14ಆಗ ದಾವೀದನು ಜೆರುಸಲೇಮಿನಲ್ಲಿ ತನ್ನೊಂದಿಗಿದ್ದ
ತನ್ನ ಸೇವಕರಿಗೆಲ್ಲ, ''ನಾವು ತಪ್ಪಿಸಿಕೊಳ್ಳಲೇಬೇಕು! ನಾವು
ತಪ್ಪಿಸಿಕೊಳ್ಳದಿದ್ದರೆ ಅಬ್ಷಾಲೋಮನು ನಮ್ಮನ್ನು ಹೋಗ
ಗೊಡಿಸುವುದಿಲ್ಲ. ಅಬ್ಷಾಲೋಮನು ನಮ್ಮನ್ನು ಹಿಡಿಯು
ವುದಕ್ಕಿಂತ ಮೊದಲೇ ಇಲ್ಲಿಂದ ಹೋಗಿ ಬಿಡೋಣ.
ಅವನು ನಮ್ಮೆಲ್ಲರನ್ನೂ ನಾಶಮಾಡುತ್ತಾನೆ; ಅವನು ಜೆರು
ಸಲೇಮಿನ ಜನರನ್ನು ಕೊಂದುಹಾಕುತ್ತಾನೆ'' ಎಂದು
ಹೇಳಿದನು.

15ರಾಜನ ಸೇವಕರು ರಾಜನಿಗೆ, ''ನಿನ್ನ ನಿರ್ಧಾರದಂತೆ
ನಾವು ಮಾಡುತ್ತೇವೆ'' ಎಂದರು.

### ದಾವೀದನು ಮತ್ತು ಅವನ ಜನರು ತಪ್ಪಿಸಿಕೊಂಡದ್ದು

16ರಾಜನಾದ ದಾವೀದನು ತನ್ನ ಮನೆಯಲ್ಲಿದ್ದ ಎಲ್ಲಾ
ಜನರೊಂದಿಗೆ ಹೊರಟನು. ಮನೆಯ ಉಸ್ತುವಾರಿ
ಯನ್ನು ನೋಡಿಕೊಳ್ಳುವುದಕ್ಕಾಗಿ ರಾಜನು ತನ್ನ ಹತ್ತು
ಮಂದಿ ಪತ್ನಿಯರನ್ನು ಅಲ್ಲಿಯೇ ಬಿಟ್ಟು 17ತನ್ನ ಹಿಂಬಾಲ
ಕರೊಂದಿಗೆ ಹೊರಟುಹೋದನು. ಅವನು ಕೊನೆಯ
ಮನೆಯ ಹತ್ತಿರ ನಿಂತುಕೊಂಡನು. 18ಅವನ ಸೇವಕರೆಲ್ಲ
ರಾಜನನ್ನು ದಾಟಿ ಮುಂದೆ ಹೋದರು. ಕೆರೇತ್ಯರು,
ಪೆಲೇತ್ಯರು ಮತ್ತು ಗಿತ್ತೀಯರು (ಗತ್‌ನ ಆರುನೂರು
ಜನರು) ರಾಜನನ್ನು ದಾಟಿಹೋದರು.

19ರಾಜನು ಗತ್‌ನ ಇತ್ತೈಯನಿಗೆ, ''ನೀನು ಸಹ
ನಮ್ಮೊಂದಿಗೆ ಏಕೆ ಬರುತ್ತಿರುವೆ? ಹಿಂದಿರುಗಿಹೋಗಿ,
ಹೊಸ ರಾಜನೊಂದಿಗೆ ನೆಲೆಸು. ನೀನು ಹೊರದೇಶೀ

**ನಾಲ್ಕು ವರ್ಷಗಳ ಬಳಿಕ** ಕೆಲವು ಪ್ರಾಚೀನ ಬರಹಗಳಲ್ಲಿ ''ನಲವತ್ತು ವರ್ಷಗಳು'' ಎಂದಿದೆ.

ಯನು. ಇದು ನಿನ್ನ ಸ್ವದೇಶವಲ್ಲ. [20]ನೀನು ನನ್ನ ಜೊತೆ
ಸೇರಿಕೊಳ್ಳಲು ಬಂದದ್ದು ನಿನ್ನೆಯಷ್ಟೇ. ನೀನು ಈಗ
ನನ್ನೊಂದಿಗೆ ಬೇರೆಬೇರೆ ಸ್ಥಳಗಳಲ್ಲಿ ಅಲೆಯಬೇಕೇ?
ಇಲ್ಲ! ನಿನ್ನ ಸೋದರರನ್ನೂ ನಿನ್ನ ಜೊತೆಯಲ್ಲಿ ಕರೆದು
ಕೊಂಡು ಹಿಂತಿರುಗಿಹೋಗು. ದಯೆಯೂ ನಂಬಿ
ಗಸ್ತಿಕೆಯೂ ನಿನ್ನಲ್ಲಿ ತೋರಿಬರಲಿ'' ಎಂದನು.

[21]ಅದಕ್ಕೆ ಇತ್ತೈಯನು ರಾಜನಿಗೆ, ''ಯೆಹೋವನಾಣೆ
ಮತ್ತು ನಿನ್ನಾಣೆ, ನಾನಂತೂ ನಿನ್ನೊಂದಿಗೆ ಇರುತ್ತೇನೆ.
ನನಗೆ ಜೀವಹೋದರೂ ಉಳಿದರೂ ನಿನ್ನೊಂದಿಗೆ
ಇರುತ್ತೇನೆ'' ಎಂದು ಹೇಳಿದನು.

[22]ದಾವೀದನು ಇತ್ತೈಯನಿಗೆ, ''ಬಾ, ಕಿದ್ರೋನ್
ಹಳ್ಳವನ್ನು ದಾಟೋಣ'' ಎಂದನು.

ಗತ್‌ನ ಇತ್ತೈಯನೂ ಅವನ ಜನರೂ ಅವರ ಮಕ್ಕಳೆ
ಲ್ಲರೂ ಕಿದ್ರೋನ್ ಹಳ್ಳವನ್ನು ದಾಟಿಹೋದರು. [23]ಜನ
ರೆಲ್ಲರೂ ಜೋರಾಗಿ ಅಳುತ್ತಿದ್ದರು. ರಾಜನಾದ
ದಾವೀದನು ಕಿದ್ರೋನ್ ಹಳ್ಳವನ್ನು ದಾಟಿಹೋದನು.
ನಂತರ ಜನರೆಲ್ಲರೂ ಅರಣ್ಯಕ್ಕೆ ಹೋದರು.
[24]ಚಾದೋಕನು ಮತ್ತು ಅವನೊಂದಿಗಿದ್ದ ಲೇವಿಯರೆಲ್ಲ
ದೇವರ ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡಿ
ದ್ದರು. ಅವರು ದೇವರ ಪವಿತ್ರ ಪೆಟ್ಟಿಗೆಯನ್ನು ಇಳಿಸಿದರು.
ಜೆರುಸಲೇಮಿನಿಂದ ಜನರೆಲ್ಲರೂ ಹೊರಗೆ ಹೋಗುವ
ವರೆಗೆ ಎಬ್ಯಾತಾರನು ಪ್ರಾರ್ಥನೆಗಳನ್ನು ಮಾಡಿದನು.

[25]ರಾಜನಾದ ದಾವೀದನು ಚಾದೋಕನಿಗೆ, ''ದೇವರ
ಪವಿತ್ರ ಪೆಟ್ಟಿಗೆಯನ್ನು ಜೆರುಸಲೇಮಿಗೆ ಮತ್ತೆ ತೆಗೆದು
ಕೊಂಡು ಹೋಗು. ಯೆಹೋವನು ನನಗೆ ದಯಾಪರ
ನಾಗಿದ್ದರೆ, ನನ್ನನ್ನು ಮತ್ತೆ ಬರಮಾಡುತ್ತಾನೆ. ಜೆರುಸಲೇ
ಮನ್ನು ಮತ್ತು ಆತನ ಆಲಯವನ್ನು ಮತ್ತೆ ನಾನು
ನೋಡುವ ಹಾಗೆ ಯೆಹೋವನು ಮಾಡುತ್ತಾನೆ. [26]ಆದರೆ
ನನ್ನ ಮೇಲೆ ಯೆಹೋವನಿಗೆ ಇಷ್ಟವಿಲ್ಲವೆಂದು ತೋರಿ
ದರೆ, ಆಗ ನನ್ನ ವಿರುದ್ಧವಾಗಿ ಆತನು ತನಗೆ ತೋಚಿದ್ದನ್ನು
ಮಾಡಲಿ'' ಎಂದನು.

[27]ರಾಜನು ಯಾಜಕನಾದ ಚಾದೋಕನಿಗೆ,
''ನೀನೊಬ್ಬ ದೇವದರ್ಶಿ. ಸಮಾಧಾನದಿಂದ ನಗರಕ್ಕೆ
ಹಿಂದಿರುಗು. ನಿನ್ನ ಮಗನಾದ ಅಹೀಮಾಚನನ್ನು ಮತ್ತು
ಎಬ್ಯಾತಾರನ ಮಗನಾದ ಯೋನಾತಾನನನ್ನು
ನಿನ್ನೊಂದಿಗೆ ಕರೆದುಕೊಂಡು ಹೋಗು. [28]ಜನರು
ಮರಳುಗಾಡಿಗೆ ದಾಟಿಹೋಗುವ ಸ್ಥಳದಲ್ಲಿ ನಾನು
ಕಾದಿರುತ್ತೇನೆ. ನಾನು ನಿನ್ನಿಂದ ವರ್ತಮಾನ ಬರುವವರೆಗೆ
ಅಲ್ಲಿ ಕಾದಿರುತ್ತೇನೆ''ಎಂದನು.

[29]ಆದ್ದರಿಂದ ಚಾದೋಕನು ಮತ್ತು ಎಬ್ಯಾತಾರನು
ದೇವರ ಪವಿತ್ರ ಪೆಟ್ಟಿಗೆಯನ್ನು ಹೊತ್ತುಕೊಂಡು ಜೆರು
ಸಲೇಮಿಗೆ ಹಿಂದಿರುಗಿ, ಅಲ್ಲಿಯೇ ಉಳಿದುಕೊಂಡರು.

### ಅಹೀತೋಫೆಲನ ವಿರುದ್ಧವಾಗಿ ದಾವೀದನ ಪ್ರಾರ್ಥನೆ

[30]ದಾವೀದನು ಆಲೀವ್ ಮರಗಳ ದಿಣ್ಣೆಯನ್ನೇರಿ
ದನು. ಅವನು ಗೋಳಾಡುತ್ತಿದ್ದನು. ಅವನು ತಲೆಯ
ಮೇಲೆ ಮುಸುಕೆಳೆದುಕೊಂಡು ಬರಿಗಾಲಿನಲ್ಲಿ ನಡೆದು
ಕೊಂಡು ಹೋದನು. ದಾವೀದನ ಜೊತೆಯಲ್ಲಿದ್ದ ಅವನ
ಜನರೆಲ್ಲರೂ ತಲೆಯ ಮೇಲೆ ಮುಸುಕು ಹಾಕಿಕೊಂಡು
ಗೋಳಾಡುತ್ತಾ ದಾವೀದನೊಂದಿಗೆ ಹೋದರು.

[31]ಒಬ್ಬನು ದಾವೀದನಿಗೆ, ''ಅಬ್ಷಾಲೋಮನ ಜೊತೆ
ಯಲ್ಲಿ ಉಪಾಯಗಳನ್ನು ಮಾಡಿದ ಜನರಲ್ಲಿ
ಅಹೀತೋಫೆಲನೂ ಒಬ್ಬನು''ಎಂದು ಹೇಳಿದನು. ಆಗ
ದಾವೀದನು, ''ಯೆಹೋವನೇ, ಅಹೀತೋಫೆಲನ ಸಲಹೆ
ಗಳನ್ನು ವಿಫಲಗೊಳಿಸು'' ಎಂದು ಪ್ರಾರ್ಥಿಸಿದನು.
[32]ದಾವೀದನು ಬೆಟ್ಟದ ಮೇಲೆ ದೇವರನ್ನು ಆರಾಧಿಸಿ
ದನು. ಆ ಸಮಯದಲ್ಲಿ ಅರ್ಕೀಯನಾದ ಹೂಷೈ
ಎಂಬವನು ಅವನಲ್ಲಿಗೆ ಬಂದನು. ಹೂಷೈನ ಅಂಗಿಯು
ಹರಿದಿತ್ತು. ಅವನ ತಲೆಯ ಮೇಲೆಲ್ಲಾ ಧೂಳಿತ್ತು.

[33]ದಾವೀದನು ಹೂಷೈಗೆ, ''ನೀನು ನನ್ನೊಂದಿಗೆ ಬರು
ವುದಾದರೆ, ನೀನು ನನಗೆ ಭಾರವಾಗುವಿಯಷ್ಟೇ.
[34]ಆದರೆ ನೀನು ಜೆರುಸಲೇಮಿಗೆ ಹಿಂದಿರುಗಿಹೋದರೆ,
ನೀನು ಅಹೀತೋಫೆಲನ ಸಲಹೆಗಳನ್ನು ನಿರರ್ಥಕ
ಗೊಳಿಸುವೆ. ನೀನು ಅಬ್ಷಾಲೋಮನಿಗೆ, 'ರಾಜನೇ,
ನಾನು ನಿನ್ನ ಸೇವಕ. ನಾನು ನಿನ್ನ ತಂದೆಯ ಸೇವೆಯನ್ನು
ಮಾಡಿದೆನು, ಆದರೆ ಈಗ ನಿನ್ನ ಸೇವೆಯನ್ನು ಮಾಡು
ತ್ತೇನೆ' ಎಂದು ಹೇಳು. [35]ಯಾಜಕರಾದ ಚಾದೋಕ್
ಮತ್ತು ಎಬ್ಯಾತಾರರು ನಿನ್ನೊಂದಿಗೆ ಇರುತ್ತಾರೆ. ರಾಜನ
ಮನೆಯಲ್ಲಿ ಕೇಳಿಸಿಕೊಂಡಿದ್ದನ್ನೆಲ್ಲ ಅವರಿಗೆ ನೀನು
ತಿಳಿಸಲೇಬೇಕು. [36]ಚಾದೋಕನ ಮಗನಾದ ಅಹೀಮಾ
ಚನ ಮತ್ತು ಎಬ್ಯಾತಾರನ ಮಗನಾದ ಯೋನಾತಾನನ
ಮೂಲಕ ನೀನು ಕೇಳಿಸಿಕೊಂಡಿದ್ದನ್ನೆಲ್ಲ ನನಗೆ ತಿಳಿಸ
ಬೇಕು'' ಎಂದು ಹೇಳಿಕೊಟ್ಟನು. [37]ದಾವೀದನ ಗೆಳೆಯ
ನಾದ ಹೂಷೈ ನಗರಕ್ಕೆ ಹೋದನು. ಅಬ್ಷಾಲೋಮನು
ಜೆರುಸಲೇಮಿಗೆ ಬಂದನು.

### ಚೀಬನು ದಾವೀದನನ್ನು ಭೇಟಿ ಮಾಡುವನು

16 ದಾವೀದನು ಆಲೀವ್ ಬೆಟ್ಟದ ಮೇಲೆ
ಸ್ವಲ್ಪದೂರ ಬಂದನು. ಅಲ್ಲಿ ಮೆಫೀಬೋಶೆತನ
ಸೇವಕನಾದ ಚೀಬನು ದಾವೀದನನ್ನು ಸಂಧಿಸಿದನು.
ಚೀಬನ ಹತ್ತಿರ ತಡಿಹಾಕಲ್ಪಟ್ಟ ಎರಡು ಹೇಸರ ಕತ್ತೆ
ಗಳಿದ್ದವು. ಆ ಹೇಸರಕತ್ತೆಗಳ ಮೇಲೆ ಇನ್ನೂರು ರೊಟ್ಟಿ
ಗಳು, ಒಂದುನೂರು ಗೊಂಚಲು ಒಣದ್ರಾಕ್ಷಿ, ಒಂದು
ನೂರು ಹಣ್ಣುಗಳು ಮತ್ತು ದ್ರಾಕ್ಷಾರಸದ ಒಂದು ಚೀಲ
ಇದ್ದವು. [2]ರಾಜನಾದ ದಾವೀದನು ಚೀಬನಿಗೆ, ''ಈ
ವಸ್ತುಗಳೆಲ್ಲ ಏತಕ್ಕಾಗಿ?'' ಎಂದು ಕೇಳಿದನು.

ಚೀಬನು, ‘‘ಹೇಸರಕತ್ತೆಗಳನ್ನು ರಾಜನ ಕುಟುಂಬದ
ವರು ಸವಾರಿ ಮಾಡುವುದಕ್ಕಾಗಿಯೂ ರೊಟ್ಟಿಗಳನ್ನು
ಮತ್ತು ಹಣ್ಣುಗಳನ್ನು ಸೇವಕರು ತಿನ್ನವುದಕ್ಕಾಗಿಯೂ
ತಂದಿದ್ದೇನೆ. ಅರಣ್ಯದಲ್ಲಿ ಶಕ್ತಿಗುಂದಿಹೋದವನು
ದ್ರಾಕ್ಷಾರಸವನ್ನು ಕುಡಿಯಲಿ’’ ಎಂದು ಉತ್ತರಿಸಿದನು.
[3]ರಾಜನು, ‘‘ಮೆಫೀಬೋಶೆತನು ಎಲ್ಲಿ?’’ಎಂದು
ಕೇಳಿದನು.

ಚೀಬನು ರಾಜನಿಗೆ, ‘‘ಮೆಫೀಬೋಶೆತನು ಜೆರುಸ
ಲೇಮಿನಲ್ಲಿಯೇ ಇದ್ದಾನೆ. ಯಾಕಂದರೆ ‘ಇಸ್ರೇಲರು ನನ್ನ
ತಾತನ ರಾಜ್ಯಾಧಿಕಾರವನ್ನು ಈ ದಿನ ನನಗೆ ಹಿಂದಕ್ಕೆ
ಕೊಡುತ್ತಾರೆ’ ಎಂಬುದು ಅವನ ಆಲೋಚನೆಯಾಗಿದೆ’’
ಎಂದನು.

[4]ಆಗ ರಾಜನು, ‘‘ಆದ್ದರಿಂದ ಮೆಫೀಬೋಶೆತನಿಗೆ
ಸೇರಿರುವುದೆಲ್ಲವನ್ನೂ ಈಗ ನಾನು ನಿನಗೆ
ಕೊಡುತ್ತೇನೆ’’ಎಂದು ಹೇಳಿದನು.

ಚೀಬನು, ‘‘ನಾನು ನಿನಗೆ ಸಾಷ್ಟಾಂಗ ನಮಸ್ಕಾರ
ಮಾಡುತ್ತೇನೆ; ಒಡೆಯನೇ, ನಿನ್ನ ದೃಷ್ಟಿಯಲ್ಲಿ ನನಗೆ
ದಯೆದೊರಕಲಿ’’ಎಂದನು.

## ಶಿಮ್ಮಿಯು ದಾವೀದನನ್ನು ಶಪಿಸುವನು

[5]ದಾವೀದನು ಬಹುರೀಮಿಗೆ ಬಂದನು. ಸೌಲನ
ಕುಟಂಬಕ್ಕೆ ಸೇರಿದ ಗೇರನ ಮಗನಾದ ಶಿಮ್ಮಿಯು
ದಾವೀದನನ್ನು ಶಪಿಸುತ್ತಾ ಬಹುರೀಮಿನಿಂದ ಹೊರಗೆ
ಬಂದನು.

[6]ದಾವೀದನ ಮತ್ತು ಅವನ ಸೇವಕರ ಮೇಲೆ ಶಿಮ್ಮಿಯು
ಕಲ್ಲುಗಳನ್ನು ಎಸೆಯಲಾರಂಭಿಸಿದನು. ಆದರೆ ದಾವೀ
ದನ ಸುತ್ತಲೂ ಜನರು ಮತ್ತು ಸೇವಕರು ಒಟ್ಟು
ಗೂಡಿದರು. [7]ಶಿಮ್ಮಿಯು ದಾವೀದನನ್ನು ಶಪಿಸುತ್ತಾ
‘‘ತೊಲಗಿಹೋಗು! ನೀನು ಕೊಲೆಗಾರ! ನೀನು ದುಷ್ಟ!
[8]ಯೆಹೋವನು ನಿನ್ನನ್ನು ದಂಡಿಸುತ್ತಿದ್ದಾನೆ. ಏಕೆಂದರೆ
ನೀನು ಸೌಲನ ಕುಟುಂಬದವರನ್ನು ಕೊಂದು ಸೌಲನ
ರಾಜಪದವಿಯನ್ನು ಕದ್ದಿರುವೆ. ಈಗ ನಿನಗೂ ಅದೇ
ಸಂಭವಿಸುತ್ತಿದೆ. ಯೆಹೋವನು ರಾಜ್ಯಾಧಿಕಾರವನ್ನು
ನಿನ್ನ ಮಗನಿಗೆ ಕೊಟ್ಟಿದ್ದಾನೆ. ಏಕೆಂದರೆ ನೀನೊಬ್ಬ ಕೊಲೆ
ಗಾರ’’ ಎಂದನು.

[9]ಚೆರೂಯಳ ಮಗನಾದ ಅಬೀಷೈಯು ರಾಜನಿಗೆ
‘‘ನನ್ನ ರಾಜನಾದ ಪ್ರಭುವೇ, ಈ ಸತ್ತನಾಯಿಯು
ನಿನ್ನನ್ನು ಶಪಿಸುವುದೇಕೆ? ಶಿಮ್ಮಿಯ ತಲೆಯನ್ನು ಕತ್ತರಿಸಿ
ಹಾಕುತ್ತೇನೆ, ನನಗೆ ಅಪ್ಪಣೆ ಕೊಡು’’ಎಂದನು.

[10]ಆದರೆ ರಾಜನು, ‘‘ಚೆರೂಯಳ ಗಂಡುಮಕ್ಕಳೇ,
ಈಗ ನಾನೇನು ಮಾಡಲಿ? ಶಿಮ್ಮಿಯು ನನ್ನನ್ನು ಶಪಿಸು
ತ್ತಿರುವುದು ನಿಜ. ಆದರೆ ನನ್ನನ್ನು ಶಪಿಸಲು
ಯೆಹೋವನೇ ಅವನಿಗೆ ಹೇಳಿದ್ದಾನೆ’’ಎಂದನು.

[11]ದಾವೀದನು ಅಬೀಷೈಗೆ ಮತ್ತು ತನ್ನ ಎಲ್ಲಾ
ಸೇವಕರಿಗೆ, ‘‘ನೋಡಿ, ನನ್ನ ಸ್ವಂತ ಮಗನೇ ನನ್ನನ್ನು
ಕೊಲ್ಲಲು ಪ್ರಯತ್ನಿಸುತ್ತಿದ್ದಾನೆ. ಬೆನ್ಯಾಮೀನ್ ಕುಲದ
ಇವನು ನನ್ನನ್ನು ಶಪಿಸುವುದು ಯಾವ ದೊಡ್ಡ ಮಾತು;
ಅವನು ನನ್ನನ್ನು ಶಪಿಸುತ್ತಲೇ ಇರಲಿ. ಹೀಗೆ ಮಾಡುವಂತೆ
ಯೆಹೋವನೇ ಅವನಿಗೆ ತಿಳಿಸಿದ್ದಾನೆ. [12]ಯೆಹೋವನು
ನನಗುಂಟಾಗುತ್ತಿರುವ ಕೇಡುಗಳನ್ನು ನೋಡಿ ಶಿಮ್ಮಿಯ
ಶಾಪಕ್ಕೆ ಬದಲಾಗಿ ಶುಭವನ್ನು ಅನುಗ್ರಹಿಸ
ಬಹುದೇನೊ’’ ಎಂದನು.

[13]ಆದುದರಿಂದ ದಾವೀದನು ತನ್ನ ಜನರೊಂದಿಗೆ
ಮುಂದೆ ಸಾಗಿದನು. ಆದರೆ ಶಿಮ್ಮಿಯು ದಾವೀದನನ್ನು
ಹಿಂಬಾಲಿಸುತ್ತಲೇ ಇದ್ದನು. ಬೆಟ್ಟದ ಪಕ್ಕದ ರಸ್ತೆಯ
ಅಂಚಿನಲ್ಲಿ ಶಿಮ್ಮಿಯು ನಡೆಯುತ್ತಾ ದಾವೀದನನ್ನು
ಶಪಿಸುತ್ತಲೇ ಇದ್ದನು. ಶಿಮ್ಮಿಯು ಕಲ್ಲುಗಳನ್ನು ಮತ್ತು
ಧೂಳನ್ನು ಸಹ ದಾವೀದನತ್ತ ಎಸೆದನು.

[14]ರಾಜನಾದ ದಾವೀದನು ಮತ್ತು ಅವನ ಜನರೆಲ್ಲರೂ
ಬಹುರೀಮಿಗೆ ಬಂದರು. ರಾಜನು ಮತ್ತು ಅವನ ಜನರು
ಆಯಾಸಗೊಂಡಿದ್ದರಿಂದ ಅವರು ಬಹುರೀಮಿನಲ್ಲಿ
ವಿಶ್ರಾಂತಿ ಪಡೆದರು.

[15]ಅಬ್ಷಾಲೋಮನು, ಅಹೀತೋಫೆಲನು ಮತ್ತು
ಇಸ್ರೇಲಿನ ಜನರೆಲ್ಲ ಜೆರುಸಲೇಮಿಗೆ ಬಂದರು.
[16]ದಾವೀದನ ಸ್ನೇಹಿತನೂ ಅರ್ಕೀಯನೂ ಆದ
ಹೂಷೈಯು ಅಬ್ಷಾಲೋಮನ ಬಳಿಗೆ ಬಂದನು.
ಹೂಷೈಯು, ‘‘ರಾಜನು ಚಿರಾಯುವಾಗಿರಲಿ, ರಾಜನು
ಚಿರಾಯುವಾಗಿರಲಿ’’ ಎಂದು ಅಬ್ಷಾಲೋಮನಿಗೆ
ಹೇಳಿದನು. [17]ಅಬ್ಷಾಲೋಮನು, ‘ನಿನ್ನ ಸ್ನೇಹಿತನಾದ
ದಾವೀದನಿಗೆ ನೀನೇಕೆ ನಂಬಿಗಸ್ತನಾಗಿಲ್ಲ? ನಿನ್ನ ಸ್ನೇಹಿತ
ನೊಡನೆ ನೀನು ಜೆರುಸಲೇಮಿನಿಂದ ಯಾಕೆ
ಹೋಗಲಿಲ್ಲ’ ಎಂದು ಕೇಳಿದನು.

[18]ಹೂಷೈಯು, ‘‘ಯೆಹೋವನು ಆರಿಸಿಕೊಂಡ ವ್ಯಕ್ತಿಗೆ
ನಾನು ಸೇರಿದವನು. ಈ ಜನರು ಮತ್ತು ಇಸ್ರೇಲಿನ ಜನರು
ನಿನ್ನನ್ನು ಆರಿಸಿದ್ದಾರೆ. ನಾನು ನಿನ್ನೊಡನೆ ನೆಲೆಸುತ್ತೇನೆ.
[19]ಮುಂಚೆ ನಾನು ನಿನ್ನ ತಂದೆಯ ಸೇವೆಮಾಡಿದೆನು. ಈಗ
ದಾವೀದನ ಮಗನ ಸೇವೆ ಮಾಡಬೇಕು. ನಾನು ನಿನ್ನ ಸೇವೆ
ಮಾಡುತ್ತೇನೆ’’ಎಂದನು.

## ಅಹೀತೋಫೆಲನ ಸಲಹೆಯನ್ನು ಅಬ್ಷಾಲೋಮನು ಕೇಳುವನು

[20]ಅಬ್ಷಾಲೋಮನು, ‘‘ನಾವೇನು ಮಾಡಬೇಕೆಂಬು
ದನ್ನು ದಯವಿಟ್ಟು ನಮಗೆ ತಿಳಿಸು’’ ಎಂದು
ಅಹೀತೋಫೆಲನನ್ನು ಕೇಳಿದನು.

[21]ಅಹೀತೋಫೆಲನು ಅಬ್ಷಾಲೋಮನಿಗೆ, ‘‘ನಿಮ್ಮ
ತಂದೆಯು, ಮನೆಯನ್ನು ಕಾಯುವುದಕ್ಕೆ ತನ್ನ ಕೆಲವು

ಪತ್ನಿಯರನ್ನು* ಇಲ್ಲಿ ಬಿಟ್ಟುಹೋಗಿದ್ದಾನೆ. ನೀನು ಅವ
ರೊಂದಿಗೆ ಮಲಗಿಕೋ. ನಿನ್ನ ತಂದೆಯು ನಿನ್ನನ್ನು
ದ್ವೇಷಿಸುವನೆಂಬುದು ಇಸ್ರೇಲರಿಗೆಲ್ಲ ಆಗ ತಿಳಿಯು
ವುದು; ನಿನಗೆ ಮತ್ತಷ್ಟು ಬೆಂಬಲವನ್ನು ಕೊಡಲು ನಿನ್ನ
ಜನರೆಲ್ಲರನ್ನು ಪ್ರೋತ್ಸಾಹಿಸಿದಂತಾಗುತ್ತದೆ'' ಎಂದನು.
22ಆಗ ಅವರು ಅಬ್ಷಾಲೋಮನಿಗಾಗಿ ಮನೆಯ
ಮಾಳಿಗೆಯ ಮೇಲೆ ಒಂದು ಗುಡಾರವನ್ನು ಹಾಕಿದರು.
ಅಬ್ಷಾಲೋಮನು ತನ್ನ ತಂದೆಯ ಪತ್ನಿಯರೊಡನೆ
ಮಲಗಿಕೊಂಡನು. ಇಸ್ರೇಲರೆಲ್ಲ ಇದನ್ನು ನೋಡಿದರು.
23ಆ ಸಮಯದಲ್ಲಿ ದಾವೀದನಿಗೆ ಮತ್ತು ಅಬ್ಷಾಲೋಮ
ನಿಗೆ ಅಹೀತೋಫೆಲನ ಸಲಹೆಯು ಬಹಳ ಮುಖ್ಯ
ವಾಗಿತ್ತು. ದೇವರ ವಾಕ್ಯವು ಮನುಷ್ಯನಿಗೆಷ್ಟು ಮುಖ್ಯವೋ
ಅಷ್ಟೇ ಮುಖ್ಯವಾಗಿತ್ತು.

### ದಾವೀದನ ಬಗ್ಗೆ ಅಹೀತೋಫೆಲನ ಸಲಹೆ

17 ಅಹೀತೋಫೆಲನು, ''ಈಗ ನಾನು ಹನ್ನೆರಡು
ಸಾವಿರ ಜನರನ್ನು ಆರಿಸಿಕೊಂಡು ಈ ರಾತ್ರಿಯೇ
ದಾವೀದನನ್ನು ಅಟ್ಟಿಸಿಕೊಂಡು ಹೋಗುತ್ತೇನೆ. 2ಅವನು
ಆಯಾಸದಿಂದ ಬಲಹೀನನಾದಾಗ ಅವನ ಮೇಲೆ ದಾಳಿ
ಮಾಡಿ ಹೆದರಿಸುವೆನು; ಆಗ ಅವನ ಜನರೆಲ್ಲರೂ ಓಡಿ
ಹೋಗುತ್ತಾರೆ. ಆದರೆ ನಾನು ರಾಜನಾದ ದಾವೀದನನ್ನು
ಮಾತ್ರ ಕೊಲ್ಲುತ್ತೇನೆ. 3ಅನಂತರ ನಾನು ಜನರೆಲ್ಲರನ್ನೂ
ಹಿಂದಕ್ಕೆ ನಿನ್ನ ಬಳಿಗೆ ಕರೆತರುತ್ತೇನೆ. ದಾವೀದನು ಸತ್ತರೆ,
ಜನರೆಲ್ಲರೂ ಸಮಾಧಾನದಿಂದ ಹಿಂದಕ್ಕೆ ಬರುತ್ತಾರೆ''
ಎಂದು ಅಬ್ಷಾಲೋಮನಿಗೆ ಹೇಳಿದನು.
4ಈ ಉಪಾಯವು ಅಬ್ಷಾಲೋಮನಿಗೆ ಮತ್ತು
ಇಸ್ರೇಲಿನ ನಾಯಕರಿಗೆಲ್ಲ ಸರಿಯೆಂದು ಕಂಡಿತು. 5ಆದರೆ
ಅಬ್ಷಾಲೋಮನು, ''ಈಗ ಅರ್ಕೀಯನಾದ ಹೂಷೈಯ
ನನ್ನು ಕರೆಯಿರಿ. ಅವನು ಏನು ಹೇಳುತ್ತಾನೆಂಬುದನ್ನು
ನಾನು ಕೇಳಬೇಕಾಗಿದೆ''ಎಂದು ಹೇಳಿದನು.

### ಅಹೀತೋಫೆಲನ ಸಲಹೆಯನ್ನು ಹೂಷೈ ನಿರರ್ಥಕಗೊಳಿಸಿದ್ದು

6ಹೂಷೈಯು ಅಬ್ಷಾಲೋಮನ ಬಳಿಗೆ ಬಂದನು.
ಅಬ್ಷಾಲೋಮನು ಹೂಷೈಗೆ, ''ಇದು ಅಹೀತೋಫೆಲನು
ನೀಡಿದ ಉಪಾಯ. ಇದನ್ನು ನಾವು ಅನುಸರಿಸಬೇಕೇ?
ಅಥವಾ ಅನುಸರಿಸಬಾರದೆ? ನಮಗೆ ತಿಳಿಸು.'' ಎಂದನು.
7ಹೂಷೈಯು ಅಬ್ಷಾಲೋಮನಿಗೆ, ''ಈ ಸಮಯದಲ್ಲಿ
ಅಹೀತೋಫೆಲನ ಸಲಹೆಯು ಸರಿಯಲ್ಲ'' ಎಂದು
ಹೇಳಿದನು. 8ಅವನು ಮಾತನ್ನು ಮುಂದುವರಿಸಿ, ''ನಿನ್ನ
ತಂದೆಯು ಮತ್ತು ಅವನ ಜನರು ಶೂರರೆಂಬುದು ನಿನಗೆ
ತಿಳಿದಿದೆ. ಕಾಡಿನಲ್ಲಿ ತನ್ನ ಮರಿಗಳನ್ನು ಕಳೆದುಕೊಂಡ
ಕರಡಿಯಂತೆ ಅವರು ರೋಷವುಳ್ಳವರಾಗಿದ್ದಾರೆ. ನಿನ್ನ
ತಂದೆಯು ಒಬ್ಬ ನುರಿತ ಹೋರಾಟಗಾರ. ಅವನು ಜನ
ರೊಂದಿಗೆ ರಾತ್ರಿಯಲ್ಲಿ ಇರುವುದಿಲ್ಲ. 9ಈಗಾಗಲೇ
ಅವನು ಒಂದು ಗವಿಯಲ್ಲಾಗಲಿ ಇಲ್ಲವೆ ಬೇರೆ ಯಾವ
ಸ್ಥಳದಲ್ಲಾಗಲಿ ಅಡಗಿಕೊಂಡಿರಬಹುದು. ನಿನ್ನ
ತಂದೆಯು ನಿನ್ನ ಜನರ ಮೇಲೆ ಆಕ್ರಮಣ ಮಾಡಿದರೆ,
ಆಗ ಜನರಿಗೆ ಸುದ್ದಿಯು ತಿಳಿಯುತ್ತದೆ. 'ಅಬ್ಷಾಲೋಮನ
ಹಿಂಬಾಲಕರು ಸೋಲುತ್ತಿದ್ದಾರೆ' ಎಂದು ಅವರು
ಯೋಚಿಸುತ್ತಾರೆ. 10ಆಗ ಸಿಂಹದಂತೆ ಶೂರರಾದ ಜನರು
ಸಹ ಹೆದರಿಕೊಳ್ಳುತ್ತಾರೆ. ಏಕೆಂದರೆ ನಿನ್ನ ತಂದೆಯು
ರಣವೀರನೆಂದು ಮತ್ತು ಅವನ ಜನರು ಧೈರ್ಯಶಾಲಿ
ಗಳೆಂದು ಇಸ್ರೇಲರೆಲ್ಲರಿಗೂ ತಿಳಿದಿದೆ.
11''ನನ್ನ ಸಲಹೆ ಹೀಗಿದೆ: ನೀನು ದಾನ್‌ನಿಂದ
ಬೇರ್ಷೆಬದವರೆಗಿನ ಇಸ್ರೇಲರನ್ನೆಲ್ಲ ಒಟ್ಟುಗೂಡಿಸು.
ಆಗ ಸಮುದ್ರ ತೀರದ ಮರಳಿನ ಕಣಗಳಂತೆ ಅಲ್ಲಿ ಅನೇಕ
ಜನರಿರುತ್ತಾರೆ. ನೀನೇ ಸ್ವತಃ ಯುದ್ಧರಂಗಕ್ಕೆ ಹೋಗ
ಬೇಕು. 12ದಾವೀದನನ್ನು ಅವನು ಅಡಗಿಕೊಂಡಿರುವ
ಸ್ಥಳದಲ್ಲಿಯೇ ನಾವು ಹಿಡಿದುಕೊಳ್ಳುತ್ತೇವೆ. ಮಂಜಿನ
ಹನಿಗಳು ಭೂಮಿಯ ಮೇಲೆ ಬೀಳುವಂತೆ ನಾವು
ದಾವೀದನ ಮೇಲೆ ಬೀಳುವೆವು. ದಾವೀದನನ್ನು ಮತ್ತು
ಅವನ ಜನರೆಲ್ಲರನ್ನು ನಾವು ಕೊಲ್ಲುವೆವು. ಯಾರನ್ನೂ
ಜೀವಸಹಿತ ಬಿಡುವುದಿಲ್ಲ. 13ಆದರೆ ದಾವೀದನು
ತಪ್ಪಿಸಿಕೊಂಡು ಬಂದು ನಗರಕ್ಕೆ ನುಗ್ಗಿದರೆ, ಇಸ್ರೇಲರೆಲ್ಲ
ಆ ನಗರದ ಹತ್ತಿರಕ್ಕೆ ಹಗ್ಗಗಳನ್ನು ತರುತ್ತಾರೆ. ನಾವು ಆ
ನಗರದ ಗೋಡೆಗಳನ್ನು ಕಣಿವೆಯ ಆಳಕ್ಕೆ ಎಳೆದು
ಬಿಡುತ್ತೇವೆ. ಆ ನಗರದಲ್ಲಿ ಒಂದು ಸಣ್ಣ ಕಲ್ಲು ಸಹ
ಉಳಿಯಲು ಬಿಡುವುದಿಲ್ಲ.''ಎಂದು ಹೇಳಿದನು.
14ಅಬ್ಷಾಲೋಮನು ಮತ್ತು ಇಸ್ರೇಲರೆಲ್ಲ, ''ಅರ್ಕೀ
ಯನಾದ ಹೂಷೈಯನ ಸಲಹೆಯು ಅಹೀತೋಫೆಲನ
ಸಲಹೆಗಿಂತ ಉತ್ತಮವಾಗಿದೆ''ಎಂದು ಹೇಳಿದರು. ಇದು
ಯೆಹೋವನ ಯೋಜನೆಯಾಗಿದ್ದ ಕಾರಣ ಅವರು ಹಾಗೆ
ಹೇಳಿದರು. ಅಹೀತೋಫೆಲನ ಒಳ್ಳೆಯ ಸಲಹೆಯನ್ನು
ನಾಶಗೊಳಿಸಲು ಯೆಹೋವನು ಈ ಯೋಜನೆಯನ್ನು
ಮಾಡಿದ್ದನು. ಹೀಗೆ ಯೆಹೋವನು ಅಬ್ಷಾಲೋಮನನ್ನು
ದಂಡಿಸಲಿದ್ದನು.

### ದಾವೀದನಿಗೆ ಹೂಷೈನ ಎಚ್ಚರಿಕೆ

15ಹೂಷೈಯು ಯಾಜಕರಾದ ಚಾದೋಕನಿಗೆ ಮತ್ತು
ಎಬ್ಯಾತಾರನಿಗೆ ಆ ವಿಚಾರಗಳನ್ನು ಹೇಳಿದನು.
ಅಬ್ಷಾಲೋಮನಿಗೆ ಮತ್ತು ಇಸ್ರೇಲಿನ ನಾಯಕರಿಗೆ
ಅಹೀತೋಫೆಲನು ಮಾಡಿದ ಸಲಹೆಗಳ ವಿಚಾರವನ್ನು

---

**ಪತ್ನಿಯರು** ಅಕ್ಷರಶಃ, ''ಉಪಪತ್ನಿಯರು''ಪತ್ನಿಯರಂತಿರುವ ಸೇವಕಿಯರು.

ಮತ್ತು ತಾನು ನೀಡಿದ ಸಲಹೆಗಳ ವರದಿಯನ್ನು,
ಚಾದೋಕ ಮತ್ತು ಎಬ್ಯಾತಾರನಿಗೆ ತಿಳಿಸಿದನು.
[16]ಹೂಷೈಯು ಅವರಿಗೆ, ನೀವು ದಾವೀದನಿಗೆ ಹೀಗೆ
ಹೇಳಿರಿ. ‘‘ಈ ರಾತ್ರಿ ನದಿಯನ್ನು ದಾಟುವ ಅಡವಿಯಲ್ಲಿ
ತಂಗಬೇಡ, ಆದಷ್ಟು ಬೇಗನೆ ನದಿಯನ್ನು ದಾಟಿ
ಆಚೆಹೋದರೆ ಒಳ್ಳೆಯದು. ಇಲ್ಲವಾದರೆ ನೀನು ನಿನ್ನ
ಜನರೊಂದಿಗೆ ನಾಶವಾಗುವೆ ಮತ್ತು ನಿನ್ನ ಜನರೆಲ್ಲರೂ
ಸಿಕ್ಕಿ ಬೀಳುವುದಿಲ್ಲ’’ ಎಂದು ಹೇಳಿದನು.
[17]ಯಾಜಕರ ಮಕ್ಕಳಾದ ಯೋನಾತಾನನು ಮತ್ತು
ಅಹೀಮಾಚನು ಎನ್‌ರೋಗೆಲಿನ ಬುಗ್ಗೆಯ ಹತ್ತಿರ
ಕಾದಿದ್ದರು. ತಾವು ನಗರದೊಳಕ್ಕೆ ಹೋಗುವುದನ್ನು
ಯಾರೂ ನೋಡಬಾರದೆಂದು ಅವರು ಅಲ್ಲಿ ಅಡಗಿ
ಕೊಂಡಿದ್ದರು. ಆದ್ದರಿಂದ ಕೆಲಸದ ಹುಡುಗಿಯೊಬ್ಬಳು
ಹೊರಗೆ ಬಂದು ಅವರಿಗೆ ಆ ಸಂದೇಶವನ್ನು ತಿಳಿಸಿದಳು.
ಬಳಿಕ ಯೋನಾತಾನನು ಮತ್ತು ಅಹೀಮಾಚನು
ದಾವೀದ ರಾಜನ ಬಳಿಗೆ ಹೋಗಿ ಅದನ್ನು ತಿಳಿಸಿದರು.
[18]ಆದರೆ ಯೋನಾತಾನ್ ಮತ್ತು ಅಹೀಮಾಚರನ್ನು
ಒಬ್ಬ ಬಾಲಕನು ನೋಡಿದನು. ಆ ಬಾಲಕನು
ಅಬ್ಷಾಲೋಮನಿಗೆ ತಿಳಿಸಲು ಓಡಿದನು. ಯೋನಾತಾ
ನನು ಮತ್ತು ಅಹೀಮಾಚನು ಬೇಗನೆ ಓಡಿಹೋಗಿ
ಬಹುರೀಮಿನಲ್ಲಿ ಒಬ್ಬನ ಮನೆಯೊಳಗೆ ಹೋದರು.
ಅವನ ಮನೆಯ ಅಂಗಳದಲ್ಲಿ ಒಂದು ಬಾವಿಯಿತ್ತು.
ಯೋನಾತಾನನು ಮತ್ತು ಅಹೀಮಾಚನು ಈ ಬಾವಿ
ಯೊಳಗೆ ಇಳಿದರು. [19]ಆ ಮನುಷ್ಯನ ಹೆಂಡತಿಯು ಒಂದು
ಹಲಗೆಯನ್ನು ಬಾವಿಯ ಮೇಲೆ ಹಾಕಿದಳು. ನಂತರ
ಅವಳು ಅದರ ಮೇಲೆ ಗೋಧಿಯನ್ನು ಹರಡಿದಳು. ಅದು
ಗೋಧಿಯ ರಾಶಿಯಂತೆ ಕಂಡಿತು. ಆದುದರಿಂದ
ಯೋನಾತಾನನು ಮತ್ತು ಅಹೀಮಾಚರು ಅಲ್ಲಿ ಅಡಗಿ
ಕೊಂಡಿದ್ದಾರೆಂಬುದು ಯಾರಿಗೂ ಗೊತ್ತಾಗಲಿಲ್ಲ.
[20]ಅಬ್ಷಾಲೋಮನ ಸೇವಕರು ಆ ಮನೆಯಲ್ಲಿದ್ದ
ಹೆಂಗಸಿನ ಬಳಿಗೆ ಬಂದು, ‘‘ಅಹೀಮಾಚ್ ಮತ್ತು
ಯೋನಾತಾನರು ಎಲ್ಲಿ? ’’ಎಂದು ಕೇಳಿದರು.

ಆ ಸ್ತ್ರೀಯು ಅಬ್ಷಾಲೋಮನ ಸೇವಕರಿಗೆ, ‘‘ಅವರು
ಈಗಾಗಲೇ ಹಳ್ಳವನ್ನು ದಾಟಿಹೋಗಿರಬೇಕು’’ಎಂದಳು.

ಆಗ ಅಬ್ಷಾಲೋಮನ ಸೇವಕರು ಯೋನಾತಾನ್
ಮತ್ತು ಅಹೀಮಾಚರನ್ನು ಹುಡುಕಲು ಹೋದರು.
ಆದರೆ ಅವರು ಸೇವಕರಿಗೆ ಸಿಗಲಿಲ್ಲ. ಆದುದರಿಂದ
ಅಬ್ಷಾಲೋಮನ ಸೇವಕರು ಜೆರುಸಲೇಮಿಗೆ
ಹಿಂದಿರುಗಿದರು.
[21]ಅಬ್ಷಾಲೋಮನ ಸೈನಿಕರು ಹೋದ ಮೇಲೆ
ಯೋನಾತಾನ್ ಮತ್ತು ಅಹೀಮಾಚರು ಬಾವಿಯಿಂದ
ಮೇಲಕ್ಕೆ ಬಂದರು. ಅವರು ಅರಸನಾದ ದಾವೀದನ
ಬಳಿಗೆ ಹೋಗಿ, ‘‘ಬೇಗ, ನದಿಯನ್ನು ದಾಟಿಹೋಗು.
ಅಹೀತೋಫೆಲನು ನಿನ್ನ ವಿರುದ್ಧವಾಗಿ ಈ ಸಂಗತಿಗಳನ್ನು
ಹೇಳಿದ್ದಾನೆ’’ಎಂದರು.
[22]ದಾವೀದನು ಮತ್ತು ಅವನ ಜನರೆಲ್ಲರೂ
ಜೋರ್ಡನ್ ನದಿಯನ್ನು ದಾಟಿಹೋದರು.
ಸೂರ್ಯನು ಮೇಲೇರುವುದಕ್ಕೆ ಮುಂಚೆಯೇ,
ದಾವೀದನ ಜನರೆಲ್ಲರೂ ಜೋರ್ಡನ್ ನದಿಯನ್ನು
ದಾಟಿಹೋಗಿದ್ದರು.

### ಅಹೀತೋಫೆಲನು ಆತ್ಮಹತ್ಯೆ ಮಾಡಿಕೊಂಡಿದ್ದು

[23]ಅಹೀತೋಫೆಲನು ತನ್ನ ಸಲಹೆಯನ್ನು ಇಸ್ರೇಲರು
ಸ್ವೀಕರಿಸಲಿಲ್ಲವೆಂಬುದನ್ನು ತಿಳಿದು ತನ್ನ ಹೇಸರಕತ್ತೆಯ
ಮೇಲೆ ತಡಿಯನ್ನು ಹಾಕಿ ತನ್ನ ಸ್ವಂತ ಊರಿನಲ್ಲಿದ್ದ ಮನೆಗೆ
ಹೋದನು. ಅವನು ತನ್ನ ಕುಟುಂಬಕ್ಕೆ ಯೋಜನೆಗಳನ್ನು
ಮಾಡಿದನು. ನಂತರ ಅವನೇ ನೇಣು ಹಾಕಿಕೊಂಡನು.
ಅಹೀತೋಫೆಲನನ್ನು ಜನರು ಅವನ ತಂದೆಯ
ಸಮಾಧಿಯ ಬಳಿ ಸಮಾಧಿ ಮಾಡಿದರು.

### ಅಬ್ಷಾಲೋಮನು ಜೋರ್ಡನ್ ನದಿಯನ್ನು ದಾಟಿದ್ದು

[24]ದಾವೀದನು ಮಹನಯಿಮಿಗೆ ಬಂದನು. ಅಬ್ಷಾ
ಲೋಮನು ಮತ್ತು ಇಸ್ರೇಲರೆಲ್ಲರೂ ಜೋರ್ಡನ್ ನದಿ
ಯನ್ನು ದಾಟಿದರು. [25]ಅಬ್ಷಾಲೋಮನು ಅಮಾಸನನ್ನು
ಸೈನ್ಯದ ಅಧಿಪತಿಯನ್ನಾಗಿ ಮಾಡಿದನು. ಅಮಾಸನು
ಯೋವಾಬನ ಸ್ಥಾನಕ್ಕೆ ಬಂದನು.* ಅಮಾಸನು ಇಸ್ರೇಲ
ನಾದ ಇತ್ರನ ಮಗ. ಅಮಾಸನ ತಾಯಿಯಾದ
ಅಬೀಗಲಳು, ನಾಹಾಷನ ಮಗಳು ಮತ್ತು ಚೆರೂಯಳ
ಸೋದರಿ.
[26]ಅಬ್ಷಾಲೋಮನು ಮತ್ತು ಇಸ್ರೇಲರು ಗಿಲ್ಯಾದ್
ದೇಶದಲ್ಲಿ ಪಾಳೆಯವನ್ನು ಮಾಡಿದರು.

### ಶೋಬಿ, ಮಾಕೀರ್ ಮತ್ತು ಬರ್ಜಿಲ್ಲೈಯರು

[27]ದಾವೀದನು ಮಹನಯಿಮಿಗೆ ಬಂದನು. ಶೋಬಿ,
ಮಾಕೀರ್ ಮತ್ತು ಬರ್ಜಿಲ್ಲೈಯರು ಆ ಸ್ಥಳದಲ್ಲಿದ್ದರು.
(ಶೋಬಿಯು ಅಮ್ಮೋನಿಯರ ಪಟ್ಟಣವಾದ ರಬ್ಬಾದ
ಊರಿನ ನಾಹಾಷನ ಮಗ. ಮಾಕೀರನು ಲೋದೆಬಾರಿನ
ಅಮ್ಮೀಯೇಲನ ಮಗ. ಬರ್ಜಿಲ್ಲೈಯು ಗಿಲ್ಯಾದ್ ನಾಡಿನ
ರೋಗೆಲೀಮ್ ನಗರದವನು). [28-29]ಅವರು, ‘‘ಅರಣ್ಯ
ದಲ್ಲಿ ಪ್ರಯಾಣಮಾಡಿ ಜನರು ದಣಿದಿದ್ದಾರೆ,

---

**ಅಮಾಸನು ... ಬಂದನು** ಯೇವಾಬನು ದಾವೀದನಿಗೆ ಇನ್ನೂ ಬೆಂಬಲ ಕೊಡುತ್ತಿದ್ದನು. ದಾವೀದನು ಅಬ್ಷಾಲೋಮನಿಂದ ತಪ್ಪಿಸಿಕೊಂಡು ಓಡಿಹೋಗುವಾಗ, ಯೋವಾಬನು ದಾವೀದನ ಮೂವರು ಸೇನಾಪತಿಗಳಲ್ಲಿ ಒಬ್ಬನಾಗಿದ್ದನು.

ಹಸಿದಿದ್ದಾರೆ ಮತ್ತು ದಾಹಗೊಂಡಿದ್ದಾರೆ'' ಎಂದು ಹೇಳಿ, ದಾವೀದನಿಗೂ ಅವನ ಜನರಿಗೂ ತಿನ್ನಲು ಅನೇಕ ಆಹಾರ ಪದಾರ್ಥಗಳನ್ನು ತಂದರು. ಅವರು ಹಾಸಿಗೆ ಗಳನ್ನು, ಬಟ್ಟಲುಗಳನ್ನು ಮತ್ತು ಮಡಕೆ ಕುಡಿಕೆಗಳನ್ನು, ಗೋಧಿ, ಬಾರ್ಲಿ, ಹಿಟ್ಟು, ಹುರಿದಕಾಳುಗಳು, ಅವರೆ, ಅಲಸಂದಿ, ಒಣಗಿಸಿದ ಬೇಳೆ, ಜೇನುತುಪ್ಪ, ಬೆಣ್ಣೆ, ಕುರಿ ಮತ್ತು ಹಸುವಿನ ಹಾಲಿನಿಂದ ಮಾಡಿದ ಗಿಣ್ಣು ಇವುಗಳನ್ನು ತಂದುಕೊಟ್ಟರು.

### ದಾವೀದನು ಯುದ್ಧಕ್ಕೆ ಸಿದ್ಧನಾಗುವನು

18 ದಾವೀದನು ತನ್ನ ಜನರನ್ನು ಲೆಕ್ಕ ಮಾಡಿದನು.
ಅವನು ಸಹಸ್ರಾಧಿಪತಿಗಳನ್ನು ಮತ್ತು ಶತಾಧಿಪತಿ
ಗಳನ್ನು ನೇಮಿಸಿದನು. 2ದಾವೀದನು ತನ್ನ ಜನರನ್ನು
ಮೂರು ಗುಂಪುಗಳಾಗಿ ವಿಂಗಡಿಸಿ ಅವರನ್ನು ಹೊರಗೆ
ಕಳುಹಿಸಿದನು. ಯೋವಾಬನು ಮೊದಲನೆ ಗುಂಪನ್ನು,
ಅಬೀಷೈ ಎರಡನೆ ಗುಂಪನ್ನು, ಗತ್‌ನ ಇತ್ತೈಯನು
ಮೂರನೆ ಗುಂಪನ್ನು ನಡೆಸಿದರು.

ರಾಜನಾದ ದಾವೀದನು, ''ನಾನೂ ನಿಮ್ಮ ಜೊತೆಯಲ್ಲಿ ಬರುತ್ತೇನೆ'' ಎಂದು ಅವರಿಗೆ ಹೇಳಿದನು.

3ಆದರೆ ಅವರು, ''ಬೇಡ, ನೀನು ನಮ್ಮ ಜೊತೆ
ಬರುವುದು ಬೇಡ. ಏಕೆಂದರೆ ನಾವು ಯುದ್ಧರಂಗದಿಂದ
ಓಡಿಹೋಗಿಬಿಟ್ಟರೆ, ಅಬ್ಷಾಲೋಮನ ಜನರು ಲಕ್ಷಿಸುವು
ದಿಲ್ಲ. ನಮ್ಮಲ್ಲಿ ಅರ್ಧದಷ್ಟು ಜನರು ಸತ್ತರೂ,
ಅಬ್ಷಾಲೋಮನ ಜನರು ಲಕ್ಷಿಸುವುದಿಲ್ಲ. ಆದರೆ ನೀನು
ನಮ್ಮ ಹತ್ತು ಸಾವಿರ ಜನರಷ್ಟು ಬೆಲೆಯುಳ್ಳವನಾಗಿರುವೆ!
ನೀನು ನಗರದಲ್ಲಿರುವುದೇ ಉತ್ತಮ. ಅಲ್ಲಿಂದಲೇ ನೀನು
ನಮಗೆ ಸಹಾಯ ಮಾಡಬಹುದು''ಎಂದು ಹೇಳಿದರು.

4ರಾಜನು ತನ್ನ ಜನರಿಗೆ, ''ನೀವು ಉತ್ತಮವೆಂದು
ಯೋಚಿಸಿದ ಕಾರ್ಯವನ್ನು ನಾನು ಮಾಡುತ್ತೇನೆ''
ಎಂದು ಹೇಳಿದನು.

ಆಗ ರಾಜನು ಊರುಬಾಗಿಲಿನ ಪಕ್ಕದಲ್ಲಿ ನಿಂತುಕೊಂಡನು. ಸೈನ್ಯವು ಹೊರಗೆ ಹೋಯಿತು. ಅವರು ನೂರು ಮತ್ತು ಒಂದು ಸಾವಿರ ಮಂದಿಯ ಗುಂಪುಗಳಾಗಿ ಹೋದರು.

### ''ಯುವಕನಾದ ಅಬ್ಷಾಲೋಮನಿಗೆ ಕರುಣೆ ತೋರಿಸಿರಿ!''

5ರಾಜನು ಯೋವಾಬನಿಗೆ, ಅಬೀಷೈಯನಿಗೆ ಮತ್ತು
ಇತ್ತೈಯನಿಗೆ, ''ನೀವು ನನಗೋಸ್ಕರವಾಗಿ ಯುವಕನಾದ
ಅಬ್ಷಾಲೋಮನಿಗೆ ಕರುಣೆ ತೋರಿಸಿ!''ಎಂದು ಆಜ್ಞಾ
ಪಿಸಿದನು. ಅಬ್ಷಾಲೋಮನ ಬಗ್ಗೆ ತನ್ನ ಸೇನಾಪತಿಗಳಿಗೆ
ರಾಜನು ನೀಡಿದ ಆಜ್ಞೆಯು ಜನರೆಲ್ಲರಿಗೂ ಕೇಳಿಸಿತು.

### ದಾವೀದನ ಸೈನ್ಯವು ಅಬ್ಷಾಲೋಮನ ಸೈನ್ಯವನ್ನು ಸೋಲಿಸಿತು

6ದಾವೀದನ ಸೈನ್ಯವು ಇಸ್ರೇಲರಾದ ಅಬ್ಷಾಲೋಮನ
ವಿರುದ್ಧ ಎಫ್ರಾಯೀಮ್ ಕಾಡಿನಲ್ಲಿ ಯುದ್ಧಮಾಡಿತು.
7ದಾವೀದನ ಸೈನ್ಯವು ಇಸ್ರೇಲರನ್ನು ಸೋಲಿಸಿತು. ಅಂದು
ಇಪ್ಪತ್ತು ಸಾವಿರ ಜನರು ಕೊಲ್ಲಲ್ಪಟ್ಟರು. 8ಯುದ್ಧವು
ದೇಶವನ್ನೆಲ್ಲ ವ್ಯಾಪಿಸಿತು. ಆದರೆ ಅಂದು ಕತ್ತಿಯಿಂದ ಸತ್ತ
ಜನರಿಗಿಂತ ಹೆಚ್ಚು ಜನರು ಕಾಡಿನಲ್ಲಿ ಸತ್ತರು.

9ಅಬ್ಷಾಲೋಮನು ದಾವೀದನ ಸೈನಿಕರ ಕೈಗೆ ಸಿಕ್ಕಿ
ಕೊಂಡನು. ಅವನು ಹೇಸರಕತ್ತೆಯ ಮೇಲೆ ಸವಾರಿ
ಮಾಡುತ್ತಾ ತಪ್ಪಿಸಿಕೊಳ್ಳಲು ಹೋದನು. ಆ ಹೇಸರ
ಕತ್ತೆಯು ದೊಡ್ಡ ಓಕ್‌ಮರದ ರೆಂಬೆಗಳ ಕೆಳಗೆ ಓಡುತ್ತಾ
ಹೋಯಿತು. ಆ ರೆಂಬೆಗಳು ದಟ್ಟವಾಗಿದ್ದುದರಿಂದ
ಅಬ್ಷಾಲೋಮನ ತಲೆಯು ಮರದಲ್ಲಿ ಸಿಕ್ಕಿಹಾಕಿ
ಕೊಂಡಿತು. ಅವನು ಕುಳಿತುಕೊಂಡಿದ್ದ ಹೇಸರಕತ್ತೆಯು
ಓಡಿಹೋದುದರಿಂದ ಅಬ್ಷಾಲೋಮನು ಮರದಲ್ಲಿ *
ನೇತಾಡುವವನಾದನು.

10ಇದನ್ನು ಕಂಡ ಒಬ್ಬನು ಯೋವಾಬನ ಬಳಿಗೆ
ಹೋಗಿ, ''ಅಬ್ಷಾಲೋಮನು ಒಂದು ಓಕ್ ಮರದಲ್ಲಿ
ನೇತಾಡುತ್ತಿದ್ದುದನ್ನು ನಾನು ನೋಡಿದೆ''ಎಂದು
ತಿಳಿಸಿದನು.

11ಯೋವಾಬನು ಆ ಮನುಷ್ಯನಿಗೆ, ''ನೀನು ಅವನನ್ನು
ಕೊಂದು ನೆಲಕ್ಕುರುಳಿಸಲಿಲ್ಲವೇಕೆ? ನಾನು ನಿನಗೆ ಒಂದು
ಸೊಂಟಪಟ್ಟಿಯನ್ನು ಮತ್ತು ಹತ್ತು ಬೆಳ್ಳಿರೂಪಾಯಿ
ಗಳನ್ನು ಕೊಡುತ್ತಿದ್ದೆನಲ್ಲ!'' ಎಂದನು.

12ಆ ಮನುಷ್ಯನು ಯೋವಾಬನಿಗೆ, ''ನೀನು ಒಂದು
ಸಾವಿರ ಬೆಳ್ಳಿ ನಾಣ್ಯಗಳನ್ನು ಕೊಟ್ಟಿದ್ದರೂ ನಾನು ರಾಜನ
ಮಗನನ್ನು ಕೊಲ್ಲಲು ಪ್ರಯತ್ನಿಸುತ್ತಿರಲಿಲ್ಲ. ಏಕೆಂದರೆ
ನಿನಗೆ, ಅಬೀಷೈಯನಿಗೆ ಮತ್ತು ಇತ್ತೈಯನಿಗೆ ರಾಜನು
ನೀಡಿದ್ದ ಆಜ್ಞೆಯನ್ನು ನಾವು ಕೇಳಿದ್ದೇವೆ. 'ಎಚ್ಚರದಿಂದಿರಿ,
ಯುವಕನಾದ ಅಬ್ಷಾಲೋಮನಿಗೆ ಕೇಡುಮಾಡದಿರಿ'
ಎಂದು ರಾಜನು ಹೇಳಿದ್ದಾನೆ. 13ನಾನು ಅಬ್ಷಾಲೋಮ
ನನ್ನು ಕೊಂದಿದ್ದರೆ ಸ್ವತಃ ರಾಜನೇ ಕಂಡುಹಿಡಿಯು
ತ್ತಿದ್ದನು. ನೀನೇ ನನ್ನನ್ನು ದಂಡಿಸುತ್ತಿದ್ದೆ'' ಎಂದು
ಹೇಳಿದನು.

14ಯೋವಾಬನು, ''ನಿನ್ನೊಂದಿಗೆ ನಾನಿಲ್ಲಿ ನನ್ನ ಕಾಲ
ವನ್ನು ವ್ಯರ್ಥಮಾಡುವುದಿಲ್ಲ'' ಎಂದನು.

ಅಬ್ಷಾಲೋಮನು ಓಕ್ ಮರದಲ್ಲಿ ನೇತಾಡುತ್ತಾ ಇನ್ನೂ ಜೀವಂತವಾಗಿದ್ದನು. ಯೋವಾಬನು ಮೂರು ಬರ್ಜಿಗಳನ್ನು ತೆಗೆದುಕೊಂಡು ಅಬ್ಷಾಲೋಮನತ್ತ ಎಸೆದನು. ಬರ್ಜಿಗಳು ಅಬ್ಷಾಲೋಮನ ಹೃದಯವನ್ನು

---

**ಮರದಲ್ಲಿ** ಅಕ್ಷರಶಃ, ''ಸ್ವರ್ಗ ಮತ್ತು ಮರ್ತ್ಯಗಳ ನಡುವೆ.''

ಛೇದಿಸಿಕೊಂಡು ಹೋದವು. 15ಯೋವಾಬನೊಂದಿಗೆ
ಹತ್ತು ಮಂದಿ ಯುವಕರು ಅವನಿಗೆ ಯುದ್ಧದಲ್ಲಿ ಸಹಾಯ
ಮಾಡಿದರು. ಈ ಹತ್ತು ಜನರೂ ಅಬ್ಷಾಲೋಮನನ್ನು
ಸುತ್ತುವರಿದು ಅವನನ್ನು ಕೊಂದರು.

16ಯೋವಾಬನು ಕಹಳೆಯನ್ನು ಊದಿ, ಅಬ್ಷಾಲೋ
ಮನ ಕಡೆಯವರಾದ ಇಸ್ರೇಲರನ್ನು ಅಟ್ಟಿಸಿಕೊಂಡು
ಹೋಗುತ್ತಿದ್ದ ಜನರನ್ನು ನಿಲ್ಲಿಸಿದನು. 17ನಂತರ
ಯೋವಾಬನ ಜನರು ಅಬ್ಷಾಲೋಮನ ದೇಹವನ್ನು
ತೆಗೆದುಕೊಂಡು ಹೋಗಿ, ಕಾಡಿನ ಒಂದು ದೊಡ್ಡ ಕುಳಿ
ಯಲ್ಲಿ ಎಸೆದರು. ಅವರು ಆ ದೊಡ್ಡ ಕುಳಿಯನ್ನು
ಕಲ್ಲುಗಳಿಂದ ತುಂಬಿಸಿದರು.

ಅಬ್ಷಾಲೋಮನನ್ನು ಹಿಂಬಾಲಿಸಿಕೊಂಡು ಬಂದಿದ್ದ
ಇಸ್ರೇಲರೆಲ್ಲ ಮನೆಗೆ ಓಡಿಹೋದರು.

18ಅಬ್ಷಾಲೋಮನು ಬದುಕಿದ್ದಾಗ, ರಾಜನ ಕಣಿವೆ
ಯಲ್ಲಿ ಒಂದು ಸ್ತಂಭವನ್ನು ನೆಡಿಸಿದ್ದನು. ಅಬ್ಷಾಲೋ
ಮನು, ‘‘ನನ್ನ ಹೆಸರನ್ನು ಜೀವಂತವಾಗಿರಿಸಲು ನನಗೆ
ಗಂಡುಮಕ್ಕಳಿಲ್ಲ’’ ಎಂದು ಹೇಳಿ ಆ ಸ್ತಂಭಕ್ಕೆ ತನ್ನ
ಹೆಸರನ್ನೇ ಕೊಟ್ಟಿದ್ದನು. ಆ ಸ್ತಂಭವನ್ನು ‘‘ಅಬ್ಷಾ
ಲೋಮನ ಸ್ಮಾರಕಸ್ತಂಭ’’ ಎಂದು ಇಂದಿಗೂ
ಕರೆಯುತ್ತಾರೆ.

## ಯೋವಾಬನು ದಾವೀದನಿಗೆ ವರ್ತಮಾನವನ್ನು ಕಳುಹಿಸಿದನು

19ಚಾದೋಕನ ಮಗನಾದ ಅಹೀಮಾಚನು
ಯೋವಾಬನಿಗೆ, ‘‘ಈಗ ಓಡುತ್ತಾಹೋಗಿ ರಾಜನಾದ
ದಾವೀದನಿಗೆ ಈ ವರ್ತಮಾನವನ್ನು ತಿಳಿಸುತ್ತೇನೆ.
ಯೆಹೋವನು ನಿನ್ನ ಶತ್ರುವನ್ನು ನಾಶಮಾಡಿದನೆಂದು
ನಾನು ಅವನಿಗೆ ಹೇಳುತ್ತೇನೆ’’ ಎಂದನು.

20ಯೋವಾಬನು ಅಹೀಮಾಚನಿಗೆ, ‘‘ಇಲ್ಲ, ದಾವೀದ
ನಿಗೆ ಇಂದು ನೀನು ಈ ವರ್ತಮಾನವನ್ನು ತಿಳಿಸುವಂತಿಲ್ಲ.
ನೀನು ಬೇರೊಂದು ದಿನದಲ್ಲಿ ವರ್ತಮಾನವನ್ನು ತಿಳಿಸ
ಬಹುದು, ಏಕೆಂದರೆ ಇಂದು ರಾಜನ ಮಗನು ಸತ್ತಿದ್ದಾನೆ’’
ಎಂದು ಉತ್ತರಿಸಿದನು.

21ಆಗ ಯೋವಾಬನು ಇಥಿಯೋಪ್ಯನಾದ ಒಬ್ಬನಿಗೆ,
‘‘ಹೋಗು, ನೀನು ನೋಡಿದ ಸಂಗತಿಗಳನ್ನು ರಾಜನಿಗೆ
ತಿಳಿಸು’’ ಎಂದು ಹೇಳಿದನು. ಇಥಿಯೋಪ್ಯನು
ಯೋವಾಬನಿಗೆ ಸಾಷ್ಟಾಂಗ ನಮಸ್ಕಾರಮಾಡಿ ದಾವೀದ
ನಿಗೆ ಹೇಳಲು ಓಡಿಹೋದನು.

22ಆದರೆ ಚಾದೋಕನ ಮಗನಾದ ಅಹೀಮಾಚನು
ಯೋವಾಬನನ್ನು ಮತ್ತೆ ಬೇಡುತ್ತಾ, ‘‘ಏನು ಸಂಭವಿಸು
ತ್ತದೆಯೊ ಸಂಭವಿಸಲಿ, ಇಥಿಯೋಪ್ಯದವನ ಹಿಂದೆ ಓಡಿ
ಹೋಗಲು ನನಗೆ ಅವಕಾಶಕೊಡು!’’ಎಂದನು.

ಯೋವಾಬನು, ‘‘ಮಗನೇ, ಈ ವರ್ತಮಾನವನ್ನು
ತೆಗೆದುಕೊಂಡು ಹೋಗಲು ನೀನು ಏಕೆ ಇಚ್ಛಿಸುವೆ?
ನೀನು ತೆಗೆದುಕೊಂಡು ಹೋಗುವ ವರ್ತಮಾನಕ್ಕೆ ನಿನಗೆ
ಯಾವ ಬಹುಮಾನವೂ ಸಿಕ್ಕುವುದಿಲ್ಲ’’ ಎಂದನು.

23ಅಹೀಮಾಚನು,‘‘ಏನಾದರೂ ಆಗಲಿ, ನಾನು ಓಡಿ
ಹೋಗುತ್ತೇನೆ’’ಎಂದು ಉತ್ತರಿಸಿದನು.

‘‘ಓಡು’’ಎಂದು ಯೋವಾಬನು ಅಹೀಮಾಚನಿಗೆ
ಹೇಳಿದನು.

ಆಗ ಅಹೀಮಾಚನು ಜೋರ್ಡನ್ ಕಣಿವೆಯ
ಮೂಲಕ ಓಡಿಹೋದನು. ಅವನು ಇಥಿಯೋಪ್ಯದವನಿ
ಗಿಂತ ಮೊದಲೇ ಹೋದನು.

## ದಾವೀದನು ಸುದ್ದಿಯನ್ನು ಕೇಳಿದ್ದು

24ದಾವೀದನು ನಗರದ ಎರಡು ಬಾಗಿಲುಗಳ ನಡುವೆ
ಕುಳಿತಿದ್ದನು. ಕಾವಲುಗಾರನು ಊರುಬಾಗಿಲುಗಳ
ಮಾಳಿಗೆಯ ಮೇಲಕ್ಕೆ ಹೋದನು. ಕಾವಲುಗಾರನು
ದೃಷ್ಟಿಸಿ ನೋಡಿದಾಗ, ಒಬ್ಬ ಮನುಷ್ಯನು ಒಬ್ಬಂಟಿಗನಾಗಿ
ಓಡಿಬರುತ್ತಿರುವುದನ್ನು ನೋಡಿದನು. 25ರಾಜನಿಗೆ
ಹೇಳುವುದಕ್ಕಾಗಿ ಕಾವಲುಗಾರನು ಜೋರಾಗಿ
ಕೂಗಿದನು.

ರಾಜನಾದ ದಾವೀದನು, ‘‘ಆ ಮನುಷ್ಯನು ಒಬ್ಬಂಟಿಗ
ನಾಗಿದ್ದರೆ ಅವನು ಸುದ್ದಿಯನ್ನು ತರುತ್ತಿದ್ದಾನೆ‘‘ ಎಂದನು.

ಆ ಮನುಷ್ಯನು ಓಡುತ್ತಾ ನಗರದ ಹತ್ತಿರಕ್ಕೆ ಬಂದನು.
26ಅವನ ಹಿಂದೆ ಇನ್ನೊಬ್ಬ ಮನುಷ್ಯನು ಓಡಿ ಬರುತ್ತಿ
ರುವುದನ್ನು ಕಾವಲುಗಾರನು ನೋಡಿದನು. ಕಾವಲು
ಗಾರನು ದ್ವಾರಪಾಲಕನನ್ನು ಕರೆದು, ‘‘ನೋಡು!
ಇನ್ನೊಬ್ಬ ಮನುಷ್ಯನು ಒಬ್ಬಂಟಿಗನಾಗಿ ಓಡುತ್ತಾ
ಬರುತ್ತಿದ್ದಾನೆ’’ ಎಂದನು.

ರಾಜನು, ‘‘ಅವನು ಸಹ ಸುದ್ದಿಯನ್ನು ತರುತ್ತಿದ್ದಾನೆ’’
ಎಂದನು.

27ಕಾವಲುಗಾರನು, ‘‘ಮೊದಲನೆಯ ಮನುಷ್ಯನು
ಓಡುತ್ತಿರುವುದು ಚಾದೋಕನ ಮಗನಾದ ಅಹೀಮಾಚ
ನಂತಿದೆಯೆಂದು ನನ್ನ ಭಾವನೆ’’ಎಂದು ಹೇಳಿದನು.

ರಾಜನು, ‘‘ಅಹೀಮಾಚನು ಒಳ್ಳೆಯ ಮನುಷ್ಯ.
ಅವನು ಶುಭ ಸಮಾಚಾರವನ್ನು ತರುತ್ತಿರಬೇಕು’’
ಎಂದನು.

28ಅಹೀಮಾಚನು ರಾಜನ ಬಳಿಗೆ ಬಂದು, ‘‘ಎಲ್ಲವೂ
ಶುಭಕರವಾಗಿದೆ’’ ಎಂದು ಹೇಳಿ ರಾಜನಿಗೆ ಸಾಷ್ಟಾಂಗ
ನಮಸ್ಕಾರ ಮಾಡಿದನು. ಅಹೀಮಾಚನು, ‘‘ನಿನ್ನ ದೇವ
ರಾದ ಯೆಹೋವನಿಗೆ ಸ್ತೋತ್ರವಾಗಲಿ! ರಾಜನಾದ ಒಡೆ
ಯನೇ, ನಿನ್ನ ವಿರುದ್ಧವಾಗಿದ್ದ ಜನರನ್ನು ಯೆಹೋವನು
ಸೋಲಿಸಿದ್ದಾನೆ’’ ಎಂದು ಹೇಳಿದನು.

[29]ರಾಜನು, ‘‘ಯುವಕನಾದ ಅಬ್ಷಾಲೋಮನು
ಕ್ಷೇಮವಾಗಿರುವನೇ?’’ಎಂದು ಕೇಳಿದನು.
ಅಹೀಮಾಚನು, ‘‘ಯೋವಾಬನು ನನ್ನನ್ನು ಕಳುಹಿಸಿ
ದಾಗ, ನಾನು ಒಂದು ದೊಡ್ಡ ಕೋಲಾಹಲವನ್ನು
ನೋಡಿದೆನು. ಆದರೆ ಅದು ಏನೆಂದು ನನಗೆ ಗೊತ್ತಿಲ್ಲ’’
ಎಂದು ಉತ್ತರಿಸಿದನು.
[30]ಆಗ ರಾಜನು, ‘‘ಅತ್ತ ಸರಿದು ನಿಲ್ಲು’’ ಎಂದನು.
ಅಹೀಮಾಚನು ಸರಿದು ನಿಂತುಕೊಂಡನು.
[31]ಇಥಿಯೋಪ್ಯದವನು ಬಂದನು. ಅವನು, ‘‘ನನ್ನ
ರಾಜನಾದ ಪ್ರಭುವಿಗೆ ಸುದ್ದಿಯಿದೆ, ನಿನ್ನ ವಿರುದ್ಧವಾಗಿದ್ದ
ಜನರನ್ನು ಇಂದು ಯೆಹೋವನು ದಂಡಿಸಿದನು!‘‘ ಎಂದು
ಹೇಳಿದನು. [32]ರಾಜನು ಅವನಿಗೆ, ‘‘ಯುವಕನಾದ
ಅಬ್ಷಾಲೋಮನು ಕ್ಷೇಮವಾಗಿರುವನೇ?’’ಎಂದು
ಕೇಳಿದನು.
ಇಥಿಯೋಪ್ಯದವನು, ‘‘ನಿನ್ನ ಶತ್ರುಗಳು ಮತ್ತು ನಿನಗೆ
ಕೇಡುಮಾಡಲು ನಿನಗೆ ವಿರುದ್ಧವಾಗಿ ಬಂದ ಜನರೆಲ್ಲರು
ಈ ಯುವಕನಂತೆಯೇ ದಂಡಿಸಲ್ಪಡುವರು’’ ಎಂದು
ಉತ್ತರಿಸಿದನು.
[33]ಅಬ್ಷಾಲೋಮನು ಸತ್ತಿದ್ದಾನೆಂಬುದು ಆಗ ರಾಜನಿಗೆ
ತಿಳಿಯಿತು. ರಾಜನು ಬಹಳ ತಳಮಳಗೊಂಡನು. ಅವನು
ನಗರದ್ವಾರದಲ್ಲಿದ್ದ ಕೊಠಡಿಗೆ ಹೋಗಿ ಅಲ್ಲಿ ಗೋಳಾಡಿ
ದನು. ಬಳಿಕ ಅಲ್ಲಿಂದ ತನ್ನ ಕೊಠಡಿಗೆ ಹೋಗುತ್ತಾ,
‘‘ನನ್ನ ಮಗನೇ, ಅಬ್ಷಾಲೋಮನೇ, ನನ್ನ ಮಗನಾದ
ಅಬ್ಷಾಲೋಮನೇ! ನಿನಗೆ ಬದಲಾಗಿ ನಾನು ಸತ್ತಿದ್ದರೆ
ಚೆನ್ನಾಗಿತ್ತು. ನನ್ನ ಮಗನಾದ ಅಬ್ಷಾಲೋಮನೇ, ನನ್ನ
ಮಗನೇ!’’ ಎಂದು ಗೋಳಾಡಿದನು.

### ಯೋವಾಬನು ದಾವೀದನನ್ನು ಖಂಡಿಸಿದ್ದು

19 ಈ ಸುದ್ದಿಯನ್ನು ಜನರು ಯೋವಾಬನಿಗೆ ತಿಳಿ
ಸಿದರು. ಅವರು ಯೋವಾಬನಿಗೆ, ‘‘ನೋಡು,
ರಾಜನು ಅಳುತ್ತಿದ್ದಾನೆ ಮತ್ತು ಅಬ್ಷಾಲೋಮನಿಗಾಗಿ
ಬಹಳ ದುಃಖಪಡುತ್ತಿದ್ದಾನೆ’’ ಎಂದು ಹೇಳಿದರು.
[2]ದಾವೀದನ ಸೈನ್ಯವು ಅಂದು ಯುದ್ಧದಲ್ಲಿ ಜಯ
ಗಳಿಸಿತು. ಆದರೆ ಜನರಿಗೆಲ್ಲ ಆ ದಿನವೇ ಅತ್ಯಂತ ಶೋಕದ
ದಿನವೂ ಆಯಿತು. ‘‘ರಾಜನು ಮಗನಿಗಾಗಿ ಬಹಳ ದುಃಖ
ಪಡುತ್ತಿದ್ದಾನೆ’’ ಎಂಬುದನ್ನು ಜನರು ಕೇಳಿ ದುಃಖ
ಪಟ್ಟರು.
[3]ಜನರು ನಾಚಿಕೆಯಿಂದ ನಗರದೊಳಕ್ಕೆ ಸದ್ದಿಲ್ಲದೆ
ಬಂದರು. ಅವರು ಯುದ್ಧದಲ್ಲಿ ಸೋತುಬಂದವರಂತೆ
ಕಾಣುತ್ತಿದ್ದರು. [4]ರಾಜನು ತನ್ನ ಮುಖವನ್ನು ಮುಚ್ಚಿ
ಕೊಂಡಿದ್ದನು. ರಾಜನು, ‘‘ನನ್ನ ಮಗನೇ, ಅಬ್ಷಾಲೋ
ಮನೇ, ಅಬ್ಷಾಲೋಮನೇ, ನನ್ನ ಮಗನೇ, ಮಗನೇ’’
ಎಂದು ಗಟ್ಟಿಯಾಗಿ ಅಳುತ್ತಿದ್ದನು.
[5]ಯೋವಾಬನು ರಾಜನ ಮನೆಗೆ ಬಂದನು. ಅವನು
ರಾಜನಿಗೆ, ‘‘ನೀನು ನಿನ್ನ ಎಲ್ಲಾ ಸೈನಿಕರನ್ನು ಅವಮಾನ
ಮಾಡುತ್ತಿರುವೆ! ನಿನ್ನ ಸೈನಿಕರು ಇಂದು ನಿನ್ನ ಜೀವವನ್ನು
ರಕ್ಷಿಸಿದರು. ಅವರು ನಿನ್ನ ಗಂಡುಮಕ್ಕಳ, ಹೆಣ್ಣುಮಕ್ಕಳ,
ಪತ್ನಿಯರ ಮತ್ತು ದಾಸಿಯರ ಜೀವಗಳನ್ನು ರಕ್ಷಿಸಿದರು.
[6]ನಿನ್ನನ್ನು ದ್ವೇಷಿಸುವ ಜನರನ್ನು ನೀನು ಪ್ರೀತಿಸುವೆ;
ನಿನ್ನನ್ನು ಪ್ರೀತಿಸುವ ಜನರನ್ನು ನೀನು ದ್ವೇಷಿಸುವೆ. ಆದ್ದ
ರಿಂದ ನಿನ್ನ ಸೇವಕರು ಅವಮಾನಿತರಾಗಿದ್ದಾರೆ. ನಿನ್ನ ಅಧಿ
ಕಾರಿಗಳು ಮತ್ತು ನಿನ್ನ ಜನರು ನಿನಗೆ ಮುಖ್ಯವಲ್ಲ
ಎಂಬುದನ್ನು ನೀನಿಂದು ರುಜುವಾತು ಪಡಿಸಿದೆ. ಇಂದು
ಅಬ್ಷಾಲೋಮನು ಬದುಕಿದ್ದು, ನಾವೆಲ್ಲರೂ ಸತ್ತಿದ್ದರೆ,
ನೀನು ಬಹಳ ಹರ್ಷಗೊಳ್ಳುತ್ತಿದ್ದೆ ಎಂಬುದನ್ನು ನಾನು
ಈ ದಿನ ಕಂಡುಕೊಂಡೆನು. [7]ಈಗ ಮೇಲೆದ್ದು ನಿನ್ನ ಸೇವಕ
ರೊಂದಿಗೆ ಮಾತನಾಡು; ಅವರನ್ನು ಪ್ರೋತ್ಸಾಹಿಸು.
ಯೆಹೋವನಾಣೆ, ಈ ಕಾರ್ಯವನ್ನು ಮಾಡಲು
ನೀನಿಂದು ಹೊರಗೆ ಹೋಗದಿದ್ದರೆ, ರಾತ್ರಿಯ ವೇಳೆಗೆ
ನಿನ್ನೊಂದಿಗೆ ಯಾವ ಮನುಷ್ಯನೂ ಉಳಿಯುವುದಿಲ್ಲ.
ನೀನು ನಿನ್ನ ಚಿಕ್ಕಂದಿನಿಂದ ಈವರೆಗೆ ಅನುಭವಿಸಿದ
ಸಂಕಷ್ಟಗಳಲ್ಲೆಲ್ಲ ಇದು ತೀರ ಕೆಟ್ಟದಾಗಿರುತ್ತದೆ’’ ಎಂದು
ಹೇಳಿದನು.
[8]ಆಗ ರಾಜನು ನಗರದ ಬಾಗಿಲಿಗೆ ಹೋದನು.
ರಾಜನು ಬಾಗಿಲಿನ ಬಳಿಯಲ್ಲಿದ್ದಾನೆಂಬ ಸುದ್ದಿಯು
ಹರಡಿತು. ಆದುದರಿಂದ ಜನರೆಲ್ಲರೂ ರಾಜನನ್ನು
ನೋಡಲು ಬಂದರು.

### ದಾವೀದನು ಮತ್ತೆ ರಾಜನಾದನು

ಅಬ್ಷಾಲೋಮನ ಹಿಂಬಾಲಕರಾದ ಇಸ್ರೇಲರೆಲ್ಲ
ಮನೆಗಳಿಗೆ ಓಡಿಹೋದರು. [9]ಇಸ್ರೇಲಿನ ಕುಲಗಳ ಜನ
ರೆಲ್ಲರೂ ತಮ್ಮಲ್ಲೇ ಚರ್ಚಿಸಿದರು. ಅವರು, ‘‘ರಾಜನಾದ
ದಾವೀದನು ಫಿಲಿಷ್ಟಿಯರಿಂದ ಮತ್ತು ಇತರ ಶತ್ರುಗಳಿಂದ
ನಮ್ಮನ್ನು ರಕ್ಷಿಸಿದನು. ಅಬ್ಷಾಲೋಮನಿಂದಾಗಿ
ದಾವೀದನು ಓಡಿಹೋಗಬೇಕಾಯಿತು. [10]ನಾವು
ನಮ್ಮನ್ನು ಆಳಲು ಅಬ್ಷಾಲೋಮನನ್ನು ಆರಿಸಿಕೊಂಡೆವು.
ಆದರೆ ಅವನೀಗ ಯುದ್ಧದಲ್ಲಿ ಸತ್ತಿದ್ದಾನೆ. ದಾವೀದನನ್ನು
ನಾವು ಮತ್ತೆ ರಾಜನನ್ನಾಗಿ ಮಾಡೋಣ’’ ಎಂದರು.
[11]ಈ ಸುದ್ದಿ ರಾಜನಿಗೆ ಮುಟ್ಟಿತು. ಆಗ ಅವನು ಯಾಜಕ
ರಾದ ಚಾದೋಕನಿಗೆ ಮತ್ತು ಎಬ್ಯಾತಾರನಿಗೆ ಸಂದೇಶ
ವನ್ನು ಕಳುಹಿಸಿದನು. ಅವನು ಹೇಳಿದ್ದೇನೆಂದರೆ,
‘‘ಯೆಹೂದದ ನಾಯಕರೊಂದಿಗೆ ಮಾತಾಡಿರಿ. ಅವರಿಗೆ,
‘ಅರಸನಾದ ನನ್ನನ್ನು ಅರಮನೆಗೆ ಕರೆದುಕೊಂಡು
ಹೋಗುವುದರಲ್ಲಿ ನೀವು ಕೊನೆಯವರಾದದ್ದೇಕೆ?
ನೋಡಿ, ರಾಜನನ್ನು ಹಿಂದೆ ಕರೆತರಬೇಕೆಂದು ಇಸ್ರೇಲ
ರೆಲ್ಲ ಮಾತನಾಡಿಕೊಳ್ಳುತ್ತಿದ್ದಾರೆ. [12]ನೀವು ನನ್ನ

ಸೋದರರು. ನೀವು ನನ್ನ ಕುಟುಂಬದವರು. ಹೀಗಿರುವಾಗ ನನ್ನನ್ನು ಮತ್ತೆ ಕರೆತರಲು ನೀವೇಕೆ ಕೊನೆಯವರಾದಿರಿ? ' ಎಂದು ಹೇಳಿ. [13]ಅಲ್ಲದೆ ಅಮಾಸನಿಗೆ, ''ನೀನು ನನ್ನ ಕುಟುಂಬದ ಒಂದು ಭಾಗವಾಗಿರುವೆ. ನಾನು ನಿನ್ನನ್ನು ಯೋವಾಬನ ಸ್ಥಾನದಲ್ಲಿ ಸೇನಾಪತಿಯನ್ನಾಗಿ ಮಾಡದೆಹೋದರೆ, ದೇವರು ನನ್ನನ್ನು ದಂಡಿಸಲಿ' ಎಂದು ಹೇಳಿ'' ಎಂದನು.

[14]ದಾವೀದನ ಮಾತುಗಳು ಯೆಹೂದದ ಜನರೆಲ್ಲರ ಹೃದಯಗಳಿಗೆ ತಾಕಿದವು, ಅವರೆಲ್ಲರೂ ಒಂದೇ ಮನಸ್ಸಿನಿಂದ ಒಪ್ಪಿಕೊಂಡರು. ಯೆಹೂದದ ಜನರು ರಾಜನಿಗೆ, ''ನೀನು ನಿನ್ನ ಸೇವಕರೆಲ್ಲರೊಡನೆ ಹಿಂದಿರುಗಿ ಬಾ'' ಎಂಬ ಸಂದೇಶವೊಂದನ್ನು ಕಳುಹಿಸಿದರು.

[15]ಆಗ ರಾಜನಾದ ದಾವೀದನು ಜೋರ್ಡನ್ ನದಿಯ ಬಳಿಗೆ ಬಂದನು. ಯೆಹೂದದ ಜನರು ರಾಜನನ್ನು ಭೇಟಿಮಾಡಲು ಗಿಲ್ಗಾಲಿಗೆ ಬಂದರು. ರಾಜನಾದ ದಾವೀದನನ್ನು ಜೋರ್ಡನ್ ನದಿಯಿಂದ ಈಚೆಗೆ ಕರೆತರಬೇಕೆಂದು ಅವರೆಲ್ಲ ಬಂದರು.

### ಶಿಮ್ಮಿಯು ದಾವೀದನಿಂದ ಕ್ಷಮೆ ಕೇಳಿದ್ದು

[16]ಗೇರನ ಮಗನಾದ ಶಿಮ್ಮಿಯು ಬೆನ್ಯಾಮೀನ್ ಕುಲದವನು. ಅವನು ಬಹುರೀಮಿನಲ್ಲಿ ನೆಲೆಸಿದ್ದನು. ರಾಜನಾದ ದಾವೀದನನ್ನು ಭೇಟಿ ಮಾಡಲು ಶಿಮ್ಮಿಯು ತ್ವರಿತವಾಗಿ ಯೆಹೂದದ ಜನರೊಂದಿಗೆ ಬಂದನು.
[17]ಬೆನ್ಯಾಮೀನ್ ಕುಲದ ಒಂದು ಸಾವಿರ ಜನರು ಸಹ ಶಿಮ್ಮಿಯೊಂದಿಗೆ ಬಂದರು. ಸೌಲನ ಕುಲದಲ್ಲಿ ಸೇವಕನಾಗಿದ್ದ ಚೀಬನು ಸಹ ಬಂದನು. ಚೀಬನು ತನ್ನ ಹದಿನೈದು ಜನ ಮಕ್ಕಳನ್ನು ಮತ್ತು ಇಪ್ಪತ್ತು ಜನ ಸೇವಕರನ್ನು ತನ್ನೊಂದಿಗೆ ಕರೆತಂದನು. ಇವರೆಲ್ಲರೂ ರಾಜನಾದ ದಾವೀದನನ್ನು ಸಂಧಿಸಲು ಜೋರ್ಡನ್ ನದಿಯ ಹತ್ತಿರಕ್ಕೆ ಬಂದರು.

[18]ರಾಜನ ಕುಟುಂಬವನ್ನು ಯೆಹೂದಕ್ಕೆ ಕರೆತರಲು, ಜನರೆಲ್ಲರೂ ಜೋರ್ಡನ್ ನದಿಯನ್ನು ದಾಟಿಹೋದರು. ರಾಜನು ಅಪೇಕ್ಷೆಪಟ್ಟಿದ್ದನ್ನು ಜನರು ಮಾಡಿದರು. ರಾಜನು ನದಿಯನ್ನು ದಾಟುತ್ತಿರುವಾಗ, ಗೇರನ ಮಗನಾದ ಶಿಮ್ಮಿಯು ಅವನನ್ನು ಸಂಧಿಸಲು ಬಂದನು. ರಾಜನ ಎದುರಿನಲ್ಲಿ ಶಿಮ್ಮಿಯು ನೆಲಕ್ಕೆ ಬಾಗಿ ನಮಸ್ಕರಿಸಿದನು. [19]ಶಿಮ್ಮಿಯು ರಾಜನಿಗೆ, ''ನನ್ನ ಒಡೆಯನೇ, ನಾನು ಮಾಡಿದ ಕೆಟ್ಟಕಾರ್ಯಗಳನ್ನು ಲಕ್ಷ್ಯಕ್ಕೆ ತಂದುಕೊಳ್ಳದಿರು. ನನ್ನ ರಾಜನಾದ ಒಡೆಯನೇ, ನೀನು ಜೆರುಸಲೇಮನ್ನು ಬಿಟ್ಟುಹೋದಾಗ ನಾನು ಮಾಡಿದ ಕೆಟ್ಟ ಕಾರ್ಯಗಳನ್ನು ನೆನಪಿಗೆ ತಂದುಕೊಳ್ಳಬೇಡ. [20]ನಾನು ಪಾಪಮಾಡಿದ್ದೇನೆ ಎಂಬುದು ನಿನಗೆ ತಿಳಿದಿದೆ. ಆದಕಾರಣವೇ, ನನ್ನ ರಾಜನಾದ ಒಡೆಯನೇ, ನಿನ್ನನ್ನು ಭೇಟಿಮಾಡಲು ಬಂದ ಯೋಸೇಫ್ಯರ ಕುಲದಲ್ಲಿ ನಾನೇ ಮೊದಲಿಗನು'' ಎಂದು ಹೇಳಿದನು.

[21]ಆದರೆ ಚೆರೂಯಳ ಮಗನಾದ ಅಬೀಷೈಯನು, ''ಯೆಹೋವನಿಂದ ಆರಿಸಲ್ಪಟ್ಟ ರಾಜನಿಗೆ ಕೆಟ್ಟದ್ದು ಸಂಭವಿಸಲಿ ಎಂದು ಶಿಮ್ಮಿಯು ಅಪೇಕ್ಷಿಸಿದ್ದರಿಂದ ಮರಣ ಶಿಕ್ಷೆಗೆ ಗುರಿಯಾಗಲೇಬೇಕು'' ಎಂದು ಹೇಳಿದನು.

[22]ದಾವೀದನು, ''ಚೆರೂಯಳ ಮಕ್ಕಳೇ, ನಾನು ನಿಮಗೆ ಏನು ಮಾಡಲಿ? ನೀವಿಂದು ನನಗೆ ವಿರುದ್ಧರಾಗಿರುವಿರಿ. ವಿಶೇಷವಾದ ಈ ದಿನದಲ್ಲಿ ಒಬ್ಬ ಇಸ್ರೇಲನನ್ನು ಸಾವಿಗೆ ಗುರಿಮಾಡುವುದು ಸರಿಯಾಗಿರುವುದೇ? ಇಸ್ರೇಲಿನಲ್ಲಿ ಈ ದಿನ ನಾನು ಇಸ್ರೇಲಿಗೆಲ್ಲ ರಾಜನೆಂಬುದು ನನಗೆ ತಿಳಿದಿದೆ'' ಎಂದನು.

[23]ನಂತರ ರಾಜನು ಶಿಮ್ಮಿಗೆ, ''ನಿನ್ನನ್ನು ಕೊಲ್ಲುವುದಿಲ್ಲ'' ಎಂದು ವಾಗ್ದಾನ ಮಾಡಿದನು.*

### ಮೆಫೀಬೋಶೆತನು ದಾವೀದನನ್ನು ನೋಡಲು ಬಂದದ್ದು

[24]ಸೌಲನ ಮೊಮ್ಮಗನಾದ ಮೆಫೀಬೋಶೆತನು ರಾಜನಾದ ದಾವೀದನನ್ನು ನೋಡಲು ಬಂದನು. ರಾಜನು ಜೆರುಸಲೇಮನ್ನು ಬಿಟ್ಟು ಸುರಕ್ಷಿತವಾಗಿ ಮತ್ತೆ ಹಿಂದಿರುಗುವತನಕ ಮೆಫೀಬೋಶೆತನು ತನ್ನ ಪಾದಗಳನ್ನು ಲಕ್ಷಿಸಿರಲಿಲ್ಲ; ಗಡ್ಡವನ್ನು ಬೋಳಿಸಿರಲಿಲ್ಲ ಮತ್ತು ಬಟ್ಟೆಗಳನ್ನು ಒಗೆದಿರಲಿಲ್ಲ. [25]ಮೆಫೀಬೋಶೆತನು ರಾಜನನ್ನು ನೋಡಲು ಜೆರುಸಲೇಮಿನಿಂದ ಬಂದನು. ರಾಜನು ಅವನಿಗೆ, ''ಮೆಫೀಬೋಶೆತನೇ, ನಾನು ಜೆರುಸಲೇಮಿನಿಂದ ಓಡಿಹೋದಾಗ ನೀನು ನನ್ನೊಡನೆ ಏಕೆ ಬರಲಿಲ್ಲ?''ಎಂದು ಕೇಳಿದನು.

[26]ಮೆಫೀಬೋಶೆತನು, ''ರಾಜನಾದ ನನ್ನ ಒಡೆಯನೇ, ನನ್ನ ಸೇವಕನಾದ ಚೀಬನು ನನಗೆ ಮೋಸಮಾಡಿದನು. ನಾನು ಚೀಬನಿಗೆ, 'ನಾನು ಕುಂಟನಾಗಿರುವದರಿಂದ ತಡಿಯೊಂದನ್ನು ಹೇಸರಕತ್ತೆಯ ಮೇಲೆ ಹಾಕು. ನಾನು ಹೇಸರಕತ್ತೆಯ ಮೇಲೆ ಕುಳಿತು, ರಾಜನೊಂದಿಗೆ ಹೋಗುತ್ತೇನೆ' ಎಂದೆನು. [27]ಆದರೆ ನನ್ನ ಸೇವಕನು ನನ್ನನ್ನು ಮೋಸಗೊಳಿಸಿದನು. ಅವನು ನನ್ನ ಬಗ್ಗೆ ನಿನಗೆ ಕೆಟ್ಟದ್ದನ್ನು ಹೇಳಿದನು. ಆದರೆ ರಾಜನಾದ ನನ್ನ ಒಡೆಯನು ದೇವದೂತನಂತಿದ್ದಾನೆ. ನಿನಗೆ ಒಳ್ಳೆಯದೆಂದು ತೋರಿದ್ದನ್ನು ಮಾಡು. [28]ನೀನು ನನ್ನ ತಾತನ ಕುಟುಂಬವನ್ನೆಲ್ಲ ಕೊಲ್ಲಬಹುದಾಗಿತ್ತು. ಆದರೆ ನೀನು ಹಾಗೆ

---

**ನಂತರ ... ವಾಗ್ದಾನ ಮಾಡಿದನು** ದಾವೀದನು ಶಿಮ್ಮಿಯನ್ನು ಕೊಲ್ಲಲಿಲ್ಲ. ಆದರೆ ಕೆಲವು ವರ್ಷಗಳ ನಂತರ, ದಾವೀದನ ಮಗನಾದ ಸೊಲೊಮೋನನು ಶಿಮ್ಮಿಯನ್ನು ಕೊಲ್ಲಲು ಆಜ್ಞೆ ಮಾಡಿದನು.

ಮಾಡಲಿಲ್ಲ. ನೀನು ನಿನ್ನ ಪಂಕ್ತಿಯಲ್ಲಿ ಊಟಮಾಡುವ ಜನರ ಜೊತೆಯಲ್ಲಿ ನನ್ನನ್ನೂ ಸೇರಿಸಿದೆ. ಆದುದರಿಂದ ರಾಜನ ಬಗ್ಗೆ ದೂರು ಹೇಳಲು ನನಗೆ ಯಾವ ಹಕ್ಕಿಲ್ಲ'' ಎಂದು ಹೇಳಿದನು.

29ರಾಜನು ಮೆಫೀಬೋಶೆತನಿಗೆ, ''ನಿನ್ನ ಸಮಸ್ಯೆಗಳ ಬಗ್ಗೆ ಹೆಚ್ಚಿಗೆ ಏನನ್ನೂ ಹೇಳಬೇಡ. ನಾನು ಈ ರೀತಿ ತೀರ್ಮಾನಿಸಿದ್ದೇನೆ. ನೀನು ಮತ್ತು ಚೀಬನು ಭೂಮಿ ಯನ್ನು ಹಂಚಿಕೊಳ್ಳಿ'' ಎಂದು ಹೇಳಿದನು.

30ಮೆಫೀಬೋಶೆತನು ರಾಜನಿಗೆ, ''ಚೀಬನೇ ಎಲ್ಲಾ ಭೂಮಿಯನ್ನು ತೆಗೆದುಕೊಳ್ಳಲಿ. ನನ್ನ ಒಡೆಯನಾದ ರಾಜನು ತನ್ನ ಸ್ವಂತ ಮನೆಗೆ ಸುರಕ್ಷಿತನಾಗಿ ಬಂದದ್ದೇ ಸಾಕು'' ಎಂದು ಹೇಳಿದನು.

## ದಾವೀದನು ಬರ್ಜಿಲ್ಲೈಗೆ, ಜೆರುಸಲೇಮಿಗೆ ಬರುವಂತೆ ಹೇಳಿದ್ದು

31ಗಿಲ್ಯಾದಿನ ಬರ್ಜಿಲ್ಲೈಯನು ರೋಗೆಲೀಮಿನಿಂದ ರಾಜನಾದ ದಾವೀದನೊಂದಿಗೆ ಜೋರ್ಡನ್ ನದಿಯ ಬಳಿಗೆ ಬಂದನು. ರಾಜನು ನದಿಯನ್ನು ದಾಟುವಾಗ ರಾಜ
ನೊಂದಿಗಿರಲು ಅವನು ಬಂದನು. 32ಬರ್ಜಿಲ್ಲೈಯನು
ಮುದುಕನಾಗಿದ್ದನು. ಅವನಿಗೆ ಎಂಭತ್ತು ವರ್ಷ ವಯ ಸ್ಸಾಗಿತ್ತು. ದಾವೀದನು ಮಹನಯಿಮಿನಲ್ಲಿ ವಾಸಿಸುತ್ತಿ ದ್ದಾಗ ಅವನು ದಾವೀದನಿಗೆ ಆಹಾರವನ್ನೂ ಮತ್ತಿತರ ವಸ್ತುಗಳನ್ನೂ ಕೊಟ್ಟಿದ್ದನು; ಯಾಕೆಂದರೆ ಅವನು
ಶ್ರೀಮಂತನಾಗಿದ್ದನು. 33ದಾವೀದನು ಬರ್ಜಿಲ್ಲೈಯನಿಗೆ,
''ನದಿಯನ್ನು ದಾಟಿ ನನ್ನೊಂದಿಗೆ ಆಚೇ ದಡಕ್ಕೆ ಬಾ. ನೀನು ಜೆರುಸಲೇಮಿನಲ್ಲಿ ನನ್ನೊಂದಿಗೆ ವಾಸಿಸುವು ದಾದರೆ, ನಾನು ನಿನ್ನನ್ನು ನೋಡಿಕೊಳ್ಳುತ್ತೇನೆ'' ಎಂದು ಹೇಳಿದನು.

34ಆದರೆ ಬರ್ಜಿಲ್ಲೈಯನು ದಾವೀದನಿಗೆ, ''ನನಗೆ ಎಷ್ಟು ವಯಸ್ಸಾಗಿದೆಯೆಂಬುದು ನಿನಗೆ ತಿಳಿದಿಲ್ಲವೇ? ನಾನು ನಿನ್ನೊಂದಿಗೆ ಜೆರುಸಲೇಮಿಗೆ ಬರಬಹುದೇ?
35ನನಗೀಗ ಎಂಭತ್ತು ವರ್ಷ. ಒಳಿತು ಕೆಡುಕುಗಳಿಗಿರುವ ವ್ಯತ್ಯಾಸ ಈಗ ನನಗೆ ತಿಳಿಯುವುದಿಲ್ಲ. ನಾನು ತಿನ್ನುವ ಇಲ್ಲವೆ ಕುಡಿಯುವ ವಸ್ತುಗಳ ರುಚಿಯೂ ನನಗೆ ಗೊತ್ತಾಗುವುದಿಲ್ಲ. ಹಾಡುತ್ತಿರುವ ಗಂಡಸರ ಮತ್ತು ಹೆಂಗಸರ ಯಾವುದೇ ಧ್ವನಿಯೂ ನನಗೆ ಕೇಳಿಸುವುದಿಲ್ಲ. ನನ್ನ ಒಡೆಯನಾದ ರಾಜನಿಗೆ ನಾನೇಕೆ ಭಾರವಾಗ
ಬೇಕು? 36ನೀನು ನನಗೆ ಕೊಡಬೇಕೆಂದಿರುವ ಯಾವ
ವಸ್ತುಗಳೂ ನನಗೆ ಬೇಕಿಲ್ಲ. ನಾನು ನಿನ್ನೊಂದಿಗೆ
ಜೋರ್ಡನ್ ನದಿಯನ್ನು ದಾಟುತ್ತೇನೆ. 37ಆದರೆ ದಯ
ವಿಟ್ಟು ನಾನು ಹಿಂದಿರುಗಲು ಬಿಡು. ನಂತರ ನಾನು ನನ್ನ ಸ್ವಂತ ಸ್ಥಳದಲ್ಲಿ ಸಾಯುತ್ತೇನೆ. ನನ್ನ ತಂದೆತಾಯಿಗಳನ್ನು ಸಮಾಧಿ ಮಾಡಿದ ಸ್ಮಶಾನದಲ್ಲಿಯೇ ನನ್ನನ್ನು ಸಮಾಧಿ ಮಾಡಲಿ. ಆದರೆ ನನ್ನ ಒಡೆಯನಾದ ರಾಜನೇ, ಇಲ್ಲಿರುವ ಕಿಮ್ಹಾಮನು ನಿನ್ನ ಸೇವಕನಾಗಿರುತ್ತಾನೆ; ಅವನು ನಿನ್ನೊಂದಿಗೆ ಬರುತ್ತಾನೆ. ನಿನಗೆ ಇಷ್ಟಬಂದಂತೆ ಅವನಿಗೆ ಮಾಡು'' ಎಂದು ಹೇಳಿದನು.

38ರಾಜನು, ''ಕಿಮ್ಹಾಮನು ನನ್ನೊಂದಿಗೆ ಬರಲಿ. ನಾನು ನಿನಗೋಸ್ಕರ ಅವನಿಗೆ ದಯೆತೋರಿಸುವೆನು. ಅವನಿಗಾಗಿ ನೀನು ಏನು ಮಾಡಬೇಕೆಂದು ಬಯಸು ತ್ತೀಯೊ ಅದನ್ನೆಲ್ಲಾ ಮಾಡುತ್ತೇನೆ'' ಎಂದು ಉತ್ತರಿಸಿದನು.

## ದಾವೀದನು ಮನೆಗೆ ಹಿಂದಿರುಗಿದ್ದು

39ರಾಜನು ಬರ್ಜಿಲ್ಲೈಯನಿಗೆ ಮುದ್ದಿಟ್ಟು ಆಶೀರ್ವದಿ ಸಿದನು. ಬರ್ಜಿಲ್ಲೈಯನು ಮನೆಗೆ ಹಿಂದಿರುಗಿದನು. ರಾಜನು ತನ್ನ ಜನರೆಲ್ಲರೊಂದಿಗೆ ನದಿಯನ್ನು ದಾಟಿದನು.

40ರಾಜನು ಜೋರ್ಡನ್ ನದಿಯನ್ನು ದಾಟಿ ಗಿಲ್ಗಾಲಿಗೆ ಹೋದನು. ಕಿಮ್ಹಾಮನು ಅವನೊಂದಿಗೆ ಹೋದನು. ಯೆಹೂದ ದೇಶದ ಜನರೆಲ್ಲರು ಮತ್ತು ಇಸ್ರೇಲಿನ ಅರ್ಧ ದಷ್ಟು ಜನರು ದಾವೀದನನ್ನು ನದಿ ದಾಟಿಸಿ ಕರೆದು ಕೊಂಡು ಹೋದರು.

## ಇಸ್ರೇಲರು ಯೆಹೂದದ ಜನರೊಂದಿಗೆ ವಾದ ಮಾಡಿದ್ದು

41ಇಸ್ರೇಲರೆಲ್ಲರೂ ರಾಜನ ಬಳಿಗೆ ಬಂದರು. ಅವರು ರಾಜನಿಗೆ, ''ನಮ್ಮ ಸೋದರರಾದ ಯೆಹೂದದ ಜನರು ತಾವೇ ಬಂದು ನಿನ್ನನ್ನು ಮತ್ತು ನಿನ್ನ ಕುಟುಂಬವನ್ನು ನಿನ್ನ ಜನರೊಂದಿಗೆ ಜೋರ್ಡನ್ ನದಿಯನ್ನು ದಾಟಿಸಿ ಕರೆತಂದದ್ದೇಕೆ?'' ಎಂದು ಕೇಳಿದರು.

42ಯೆಹೂದದ ಜನರೆಲ್ಲರು ಇಸ್ರೇಲರಿಗೆ, ''ಏಕೆಂದರೆ ರಾಜನು ನಮ್ಮ ಸಮೀಪದ ಬಂಧು. ಇದರ ಕುರಿತು ನೀವೇಕೆ ನಮ್ಮ ಮೇಲೆ ಕೋಪಗೊಳ್ಳುತ್ತೀರಿ? ರಾಜನ ಖರ್ಚಿನಲ್ಲೇನೂ ನಾವು ಊಟಮಾಡಲಿಲ್ಲ. ರಾಜನು ನಮಗೆ ಯಾವ ಬಹುಮಾನವನ್ನೂ ನೀಡಲಿಲ್ಲ''ಎಂದು ಉತ್ತರಿಸಿದರು.

43ಇಸ್ರೇಲರು, ''ದಾವೀದನಲ್ಲಿ ನಾವು ಹತ್ತುಪಾಲನ್ನು ಹೊಂದಿದ್ದೇವೆ. ಆದುದರಿಂದ ದಾವೀದನ ಮೇಲೆ ನಿಮಗಿಂತಲೂ ನಮಗೆ ಹೆಚ್ಚಿನ ಹಕ್ಕಿದೆ. ಆದರೆ ನೀವು ನಮ್ಮನ್ನು ಕಡೆಗಣಿಸಿದ್ದೇಕೆ? ರಾಜನನ್ನು ಹಿಂದಕ್ಕೆ ಕರೆ ತರಲು ಮಾತನಾಡಿದವರಲ್ಲಿ ನಾವೇ ಮೊದಲಿಗರು'' ಎಂದು ಉತ್ತರಿಸಿದರು.

ಆದರೆ ಯೆಹೂದದ ಜನರು ಇಸ್ರೇಲರಿಗೆ ಕಟುವಾಗಿ ಉತ್ತರಿಸಿದರು. ಯೆಹೂದ ಜನರ ಮಾತುಗಳು ಇಸ್ರೇಲರ ಮಾತುಗಳಿಗಿಂತ ಹೆಚ್ಚು ಕಟುವಾಗಿದ್ದವು.

### ಶೆಬನು ದಾವೀದನ ವಿರುದ್ಧವಾಗಿ ದಂಗೆ ಎದ್ದದ್ದು

20 ಬಿಕ್ರೀಯ ಮಗನಾದ ಶೆಬ ಅಲ್ಲಿದ್ದನು. ಇವನು ದುಷ್ಟನಾಗಿದ್ದನು; ಬೆನ್ಯಾಮೀನ್ ಕುಲದವನಾಗಿದ್ದ ಇವನು, ತುತ್ತೂರಿಯನ್ನು ಊದುತ್ತಾ,

> ''ದಾವೀದನಲ್ಲಿ ನಮ್ಮ ಪಾಲು ಏನೂ ಇಲ್ಲ. ಇಷಯನ ಮಗನಲ್ಲಿ ನಮಗೇನೂ ಇಲ್ಲ. ನಾವೆಲ್ಲ, ಅಂದರೆ ಇಸ್ರೇಲರೆಲ್ಲ ನಮ್ಮನಮ್ಮ ಗುಡಾರಗಳಿಗೆ ಹೋಗೋಣ'' ಎಂದು ಹೇಳಿದನು.

[2]ಆಗ ಇಸ್ರೇಲರೆಲ್ಲರು ದಾವೀದನನ್ನು ತೊರೆದು, ಬಿಕ್ರೀಯ ಮಗನಾದ ಶೆಬನನ್ನು ಹಿಂಬಾಲಿಸಿದರು. ಆದರೆ ಯೆಹೂದದ ಜನರೆಲ್ಲರೂ ಜೋರ್ಡನ್ ನದಿಯಿಂದ ಜೆರುಸಲೇಮಿನ ತನಕ ತಮ್ಮ ರಾಜನ ಜೊತೆಯಲ್ಲಿಯೇ ಇದ್ದರು.
[3]ದಾವೀದನು ಜೆರುಸಲೇಮಿನ ತನ್ನ ಅರಮನೆಗೆ ಬಂದನು. ದಾವೀದನು ಮನೆ ಕಾಯಲು ಬಿಟ್ಟುಹೋದ ತನ್ನ ಹತ್ತು ಮಂದಿ ಉಪಪತ್ನಿಯರನ್ನು* ಒಂದು ಮನೆಯಲ್ಲಿ ಇಟ್ಟಿದ್ದನು. ಈ ಮನೆಯನ್ನು ಕಾವಲುಗಾರರು ಕಾಯುತ್ತಿದ್ದರು. ಈ ಹೆಂಗಸರು ತಾವು ಸಾಯುವವರೆಗೆ ಈ ಮನೆಯಲ್ಲಿಯೇ ನೆಲೆಸಿದ್ದರು. ದಾವೀದನು ಅವರಿಗೆ ಆಹಾರ ವಸ್ತ್ರಗಳನ್ನು ಕೊಟ್ಟನು. ಆದರೆ ಅವನು ಅವರೊಂದಿಗೆ ಮಲಗಿಕೊಳ್ಳಲಿಲ್ಲ. ಅವರು ಸಾಯುವವರೆಗೆ ವಿಧವೆಯರಂತಿದ್ದರು.
[4]ರಾಜನು ಅಮಾಸನಿಗೆ, ''ಯೆಹೂದದ ಜನರು ನನ್ನನ್ನು ಮೂರು ದಿನಗಳಲ್ಲಿ ನೋಡುವಂತೆ ಅವರಿಗೆ ತಿಳಿಸು. ನೀನು ಸಹ ಇಲ್ಲಿಯೇ ಇರು'' ಎಂದು ಹೇಳಿದನು.
[5]ಆಗ ಅಮಾಸನು ಯೆಹೂದದ ಜನರನ್ನು ಒಟ್ಟಾಗಿ ಕರೆಯಲು ಹೋದನು; ಆದರೆ ನೇಮಕವಾದ ಸಮಯಕ್ಕೆ ಬರದೆ ತಡಮಾಡಿದನು.

### ಶೆಬನನ್ನು ಕೊಲ್ಲುವಂತೆ ಅಬೀಷೈಯನಿಗೆ ದಾವೀದನು ಹೇಳಿದ್ದು

[6]ದಾವೀದನು ಅಬೀಷೈಯನಿಗೆ, ''ಬಿಕ್ರೀಯ ಮಗನಾದ ಶೆಬನು ಅಬ್ಷಾಲೋಮನಿಗಿಂತ ನಮಗೆ ಹೆಚ್ಚು ಅಪಾಯಕಾರಿಯಾಗಿದ್ದಾನೆ. ಆದುದರಿಂದ ನನ್ನ ಸೇವಕರನ್ನು ಕರೆದುಕೊಂಡು, ಶೆಬನನ್ನು ಅಟ್ಟಿಸಿಕೊಂಡು ಹೋಗು. ಶೆಬನು ಕೋಟೆಗಳಿರುವ ನಗರಗಳಲ್ಲಿ ಸೇರಿಕೊಳ್ಳುವುದಕ್ಕಿಂತ ಮುಂಚೆಯೇ ತ್ವರಿತವಾಗಿ ಹೋಗು. ಶೆಬನು ಕೋಟೆಗಳಿರುವ ನಗರಗಳಲ್ಲಿ ಸೇರಿಕೊಂಡರೆ, ಅವನು ನಮ್ಮಿಂದ ತಪ್ಪಿಸಿಕೊಂಡು ಬಿಡುತ್ತಾನೆ'' ಎಂದು ಹೇಳಿದನು.
[7]ಯೋವಾಬನ ಜನರು, ಕೆರೇತ್ಯರು, ಪೆಲೇತ್ಯರು ಮತ್ತು ಸೈನಿಕರೆಲ್ಲರೂ ಜೆರುಸಲೇಮಿನಿಂದ ಹೊರಟು ಬಿಕ್ರೀಯ ಮಗನಾದ ಶೆಬನನ್ನು ಅಟ್ಟಿಸಿಕೊಂಡು ಹೋದರು.

### ಯೋವಾಬನು ಅಮಾಸನನ್ನು ಕೊಂದದ್ದು

[8]ಯೋವಾಬನು ತನ್ನ ಸೈನ್ಯದೊಂದಿಗೆ ಗಿಬ್ಯೋನಿನಲ್ಲಿದ್ದ ''ದೊಡ್ಡ ಕಲ್ಲಿನ'' ಬಳಿಗೆ ಬಂದಾಗ, ಅಮಾಸನು ಅವರನ್ನು ಸಂಧಿಸಲು ಬಂದನು. ಯೋವಾಬನು ತನ್ನ ಸಮವಸ್ತ್ರಗಳನ್ನು ಧರಿಸಿದ್ದನು. ಸೊಂಟಪಟ್ಟಿಯನ್ನು ಕಟ್ಟಿಕೊಂಡಿದ್ದನು. ಅವನ ಖಡ್ಗವು ಒರೆಯಲ್ಲಿತ್ತು. ಅವನು ಅಮಾಸನನ್ನು ಸಂಧಿಸಲು ಮುಂದೆ ಸಾಗಿದಾಗ, ಅವನ ಖಡ್ಗವು ಒರೆಯಿಂದ ಹೊರಗೆ ಬಿದ್ದಿತು. ಯೋವಾಬನು ಖಡ್ಗವನ್ನು ಎತ್ತಿಕೊಂಡು ಅದನ್ನು ತನ್ನ ಕೈಗಳಲ್ಲಿ ಹಿಡಿದುಕೊಂಡನು.
[9]ಅವನು ಅಮಾಸನನ್ನು, ''ಸೋದರನೇ, ನೀವೆಲ್ಲ ಕ್ಷೇಮವೇ?'' ಎಂದು ಕೇಳಿದನು.
ಯೋವಾಬನು ಅಮಾಸನಿಗೆ ಮುದ್ದಿಡಲು ಅವನ ಗಡ್ಡವನ್ನು ಬಲಗೈಯಲ್ಲಿ ಹಿಡಿದನು.
[10]ಅವನ ಕೈಯಲ್ಲಿದ್ದ ಖಡ್ಗವನ್ನು ಅಮಾಸನು ಗಮನಿಸಲಿಲ್ಲ. ಅಮಾಸನ ಹೊಟ್ಟೆಯಲ್ಲಿದ್ದದ್ದೆಲ್ಲ ಹೊರಚೆಲ್ಲಿ ನೆಲದ ಮೇಲೆ ಬೀಳುವಂತೆ ಯೋವಾಬನು ಅವನ ಹೊಟ್ಟೆಗೆ ಖಡ್ಗದಿಂದ ತಿವಿದನು. ಅಮಾಸನು ಆಗಲೇ ಸತ್ತದ್ದರಿಂದ ಯೋವಾಬನು ಮತ್ತೆ ತಿವಿಯಲಿಲ್ಲ.

### ದಾವೀದನ ಜನರು ಶೆಬನನ್ನು ಹುಡುಕತೊಡಗಿದ್ದು

ನಂತರ ಯೋವಾಬನು ತನ್ನ ಸೋದರನಾದ ಅಬೀಷೈಯನೊಂದಿಗೆ ಬಿಕ್ರೀಯ ಮಗನಾದ ಶೆಬನನ್ನು ಅಟ್ಟಿಸಿಕೊಂಡು ಹೋದನು.
[11]ಯೋವಾಬನ ಯುವ ಜನರಲ್ಲಿ ಒಬ್ಬನು ಅಮಾಸನ ದೇಹದ ಹತ್ತಿರ ನಿಂತುಕೊಂಡು, ''ಯೋವಾಬನನ್ನು ಮತ್ತು ದಾವೀದನನ್ನು ಬೆಂಬಲಿಸುವ ಪ್ರತಿಯೊಬ್ಬರೂ ಯೋವಾಬನನ್ನು ಹಿಂಬಾಲಿಸಲೇಬೇಕು. ಶೆಬನನ್ನು ಅಟ್ಟಿಸಿಕೊಂಡು ಹೋಗಲು ಅವನಿಗೆ ಸಹಾಯಮಾಡಿ'' ಎಂದು ಹೇಳಿದನು.
[12]ಅಮಾಸನು ರಸ್ತೆಯ ಮಧ್ಯದಲ್ಲಿ ತನ್ನ ರಕ್ತದಲ್ಲಿಯೇ ಬಿದ್ದಿದ್ದನು. ಅವನ ದೇಹವನ್ನು ನೋಡಲು ಜನರೆಲ್ಲರೂ ನಿಲ್ಲುತ್ತಿದ್ದರು. ಆದುದರಿಂದ ಆ ಯುವಕನು ಅಮಾಸನ ದೇಹವನ್ನು ರಸ್ತೆಯಿಂದ ಎತ್ತಿ ಹೊಲದಲ್ಲಿಟ್ಟನು. ನಂತರ ಅವನು ಅಮಾಸನ ದೇಹದ ಮೇಲೆ ಒಂದು ವಸ್ತ್ರವನ್ನು ಹೊದಿಸಿದನು.
[13]ಅಮಾಸನ ದೇಹವನ್ನು ರಸ್ತೆಯಿಂದ ಎತ್ತಿಕೊಂಡು ಹೋದಮೇಲೆ ಜನರೆಲ್ಲರೂ ಯೋವಾಬನನ್ನು ಹಿಂಬಾಲಿಸಿದರು. ಬಿಕ್ರೀಯ ಮಗನಾದ ಶೆಬನನ್ನು

---

**ಉಪಪತ್ನಿಯರನ್ನು** ಈ ಉಪಪತ್ನಿಯರನ್ನು ಅಬ್ಷಾಲೋಮನು ಕೆಡಿಸಿದನು. ನೋಡಿ 2ಸಮು. 16:21-22.

ಅಟ್ಟಿಸಿಕೊಂಡು ಹೋಗಲು ಅವರು ಯೋವಾಬ ನೊಂದಿಗೆ ಹೋದರು.

### ಶೆಬನು ತಪ್ಪಿಸಿಕೊಂಡು ಅಬೇಲ್ಬೇತ್ಮಾಕಾಗೆ ಹೋದದ್ದು

14ಬಿಕ್ರೀಯ ಮಗನಾದ ಶೆಬನು ಇಸ್ರೇಲಿನ ಎಲ್ಲಾ ಕುಲಗಳ ಮೂಲಕ ಸಂಚರಿಸುತ್ತಾ ಅಬೇಲ್ಬೇತ್ಮಾಕಾಗೆ ಹೋದನು. ಬೇರಿ ಕುಲದವರೆಲ್ಲರೂ ಒಟ್ಟಿಗೆ ಸೇರಿ ಕೊಂಡು ಶೆಬನನ್ನು ಹಿಂಬಾಲಿಸಿದರು.

15ಯೋವಾಬನು ತನ್ನ ಜನರೊಂದಿಗೆ ಅಬೇಲ್ಬೇತ್ಮಾ ಕಾಗೆ ಬಂದನು. ಯೋವಾಬನ ಸೈನ್ಯವು ಪಟ್ಟಣವನ್ನು ಸುತ್ತುಗಟ್ಟಿತು. ಅವರು ನಗರದ ಗೋಡೆಯ ಹತ್ತಿರ ಮಣ್ಣಿನ ದಿಬ್ಬವನ್ನು ಮಾಡಿ ಗೋಡೆಯನ್ನು ಸಮೀಪಿಸಿ ದರು; ನಂತರ ಆ ಗೋಡೆಯನ್ನು ಬೀಳಿಸುವುದಕ್ಕಾಗಿ ಅದನ್ನು ಹೊಡೆಯಲಾರಂಭಿಸಿದರು.

16ಆ ನಗರದ ಬುದ್ಧಿವಂತ ಸ್ತ್ರೀಯೊಬ್ಬಳು ಪಟ್ಟಣ ದೊಳಗಿಂದ ಜೋರಾಗಿ ಕೂಗುತ್ತಾ, ‘‘ನನ್ನ ಮಾತನ್ನು ಕೇಳಿ. ಯೋವಾಬನನ್ನು ಇಲ್ಲಿಗೆ ಬರಲು ಹೇಳಿ. ನಾನು ಅವನ ಜೊತೆಯಲ್ಲಿ ಮಾತಾಡಬೇಕಾಗಿದೆ’’ ಎಂದು ಹೇಳಿದಳು.

17ಯೋವಾಬನು ಆ ಸ್ತ್ರೀಯೊಂದಿಗೆ ಮಾತಾಡಲು ಹತ್ತಿರಕ್ಕೆ ಬಂದನು. ಅವಳು, ‘‘ನೀನು ಯೋವಾಬನೇ?’’ ಎಂದು ಕೇಳಿದಳು.

‘‘ಹೌದು, ನಾನೇ ಯೋವಾಬನು’’ ಎಂದು ಅವನು ಉತ್ತರಿಸಿದನು.

ಆಗ ಅವಳು ಯೋವಾಬನಿಗೆ, ‘‘ನಾನು ಹೇಳುವುದನ್ನು ಕೇಳು’’ ಎಂದಳು.

‘‘ಆಗಲಿ, ಕೇಳುತ್ತೇನೆ’’ ಎಂದು ಯೋವಾಬನು ಉತ್ತರಿಸಿದನು.

18ಆಗ ಅವಳು, ‘‘ಪೂರ್ವಕಾಲದಲ್ಲಿ ಜನರು, ‘ಅಗತ್ಯವಿದ್ದಾಗ ಅಬೇಲಿನವರ ಸಲಹೆಯನ್ನು ಕೇಳಿ, ಆಗ ನಿಮಗೆ ಸೂಕ್ತ ಸಲಹೆ ದೊರಕುತ್ತದೆ.’ ಎಂದು ಹೇಳು
ತ್ತಿದ್ದರು. 19ನಮ್ಮ ಪಟ್ಟಣವು ಇಸ್ರೇಲರಲ್ಲಿ ಶಾಂತಿ ಯಿಂದಲೂ ರಾಜನಿಷ್ಠೆಯಿಂದಲೂ ಇದೆ. ಈ ಕಾರಣ ದಿಂದ ಈ ಪಟ್ಟಣವು ಇಸ್ರೇಲ್ ಪಟ್ಟಣಗಳಲ್ಲಿ ತಾಯಿ ಎನಿಸಿಕೊಂಡಿದೆ. ಇಂಥ ಪಟ್ಟಣವನ್ನು ನೀನು ನಾಶ ಮಾಡುವುದು ಸರಿಯೋ? ಎಂದು ಕೇಳಿದಳು.

20ಯೋವಾಬನು, ‘‘ಇಲ್ಲ, ಇಲ್ಲ! ನಾನು ಏನನ್ನೂ ನಾಶ ಪಡಿಸಲು ಇಚ್ಛಿಸಿಲ್ಲ. ನಿಮ್ಮ ಪಟ್ಟಣವನ್ನು ನಾಶಪಡಿಸಲು ನಾನು ಬಂದಿಲ್ಲ.
21ಆದರೆ ಎಫ್ರಾಯೀಮ್ ಬೆಟ್ಟ ಪ್ರದೇಶದ ಒಬ್ಬ ಮನುಷ್ಯನಿದ್ದಾನೆ. ಅವನನ್ನು ಶೆಬ ಎನ್ನು ತ್ತಾರೆ. ಅವನು ಬಿಕ್ರೀಯನ ಮಗನು. ಅವನು ರಾಜನಾದ ದಾವೀದನ ವಿರುದ್ಧ ದಂಗೆ ಎದ್ದಿದ್ದಾನೆ. ನೀನು ಅವನನ್ನು ನನ್ನ ಬಳಿಗೆ ತಂದು ಒಪ್ಪಿಸಿದರೆ, ನಾನು ಈ ನಗರವನ್ನು ಬಿಟ್ಟುಹೋಗುತ್ತೇನೆ’’ ಎಂದು ಉತ್ತರಿಸಿದನು.

ಅವಳು ಯೋವಾಬನಿಗೆ, ‘‘ಸರಿ, ಅವನ ತಲೆಯನ್ನು ಗೋಡೆಯ ಮೇಲಿನಿಂದ ನಿನ್ನ ಕಡೆಗೆ ಎಸೆಯ ಲಾಗುವುದು’’ ಎಂದು ಹೇಳಿದಳು.
22ನಂತರ ಅವಳು ನಗರದ ಎಲ್ಲ ಜನರೊಂದಿಗೆ ಬಹಳ ಜಾಣತನದಿಂದ ಮಾತನಾಡಿದಳು. ಆಗ ಜನರು ಬಿಕ್ರೀಯ ಮಗನಾದ ಶೆಬನ ತಲೆಯನ್ನು ಕತ್ತರಿಸಿಹಾಕಿ ಅದನ್ನು ನಗರದ ಗೋಡೆಯಿಂದಾಚೆಗೆ ಯೋವಾಬನ ಕಡೆಗೆ ಎಸೆದರು.

ಆ ಕೂಡಲೇ ಯೋವಾಬನು ತುತ್ತೂರಿಯನ್ನು ಊದಿ ಸಿದನು. ಸೈನ್ಯವು ನಗರವನ್ನು ಬಿಟ್ಟುಹೋಯಿತು. ಪ್ರತಿ ಯೊಬ್ಬರೂ ತಮ್ಮತಮ್ಮ ಮನೆಗಳಿಗೆ ಹಿಂತಿರುಗಿದರು. ಯೋವಾಬನು ಜೆರುಸಲೇಮಿನಲ್ಲಿದ್ದ ರಾಜನ ಬಳಿಗೆ ಹಿಂದಿರುಗಿ ಹೋದನು.

### ದಾವೀದನ ಆಸ್ಥಾನದಲ್ಲಿದ್ದ ಜನರು

23ಯೋವಾಬನು ಇಸ್ರೇಲಿನ ಸೈನ್ಯಕ್ಕೆಲ್ಲ ಮುಖ್ಯ ಸೇನಾ ಪತಿಯಾಗಿದ್ದನು. ಕೆರೇತ್ಯರಿಗೆ ಮತ್ತು ಪೆಲೇತ್ಯರಿಗೆ ಯೆಹೋಯಾದಾವನ ಮಗನಾದ ಬೆನಾಯನು ಅಧಿಪತಿ ಯಾಗಿದ್ದನು.
24ಅದೋನಿರಾಮನು ಬಿಟ್ಟೀ ಕೆಲಸ ಮಾಡುವವರ ಮೇಲಾಧಿಕಾರಿಯಾಗಿದ್ದನು. ಅಹೀಲೂ ದನ ಮಗನಾದ ಯೆಹೋಷಾಫಾಟನು ಇತಿಹಾಸಗಾರ ನಾಗಿದ್ದನು.
25ಶೆವನು ಕಾರ್ಯದರ್ಶಿಯಾಗಿದ್ದನು. ಚಾದೋಕ್ ಮತ್ತು ಎಬ್ಯಾತಾರರು ಯಾಜಕರಾಗಿದ್ದರು.
26ಯಾಯೀರಿನವನಾದ ಈರನು ದಾವೀದನ ಮುಖ್ಯ ಸೇವಕನಾಗಿದ್ದನು.*

### ಸೌಲನ ಕುಟುಂಬಕ್ಕಾದ ದಂಡನೆ

21 ದಾವೀದನ ಕಾಲದಲ್ಲಿ ಒಮ್ಮೆ ಮೂರು ವರ್ಷಗ ಳವರೆಗೆ ಬರಗಾಲವಿತ್ತು. ದಾವೀದನು ಯೆಹೋವನಲ್ಲಿ ಪ್ರಾರ್ಥಿಸಿದನು. ಆಗ ಯೆಹೋವನು, ‘‘ಸೌಲನು ಮತ್ತು ಕೊಲೆಗಾರರಾದ ಅವನ ಕುಟುಂಬ ದವರು ಈ ಬರಗಾಲಕ್ಕೆ ಕಾರಣ. ಸೌಲನು ಗಿಬ್ಯೋನ್ಯ ರನ್ನು ಕೊಂದುದರಿಂದ ಈಗಿನ ಬರಗಾಲವು ಬಂದಿದೆ’’ ಎಂದು ಹೇಳಿದನು.
2(ಗಿಬ್ಯೋನ್ಯರು ಇಸ್ರೇಲರಲ್ಲ. ಅವರು ಇನ್ನೂ ಜೀವಂತವಾಗಿ ಉಳಿದಿರುವ ಅಮ್ಮೋರಿ ಯರ ಕುಟುಂಬದವರು. ಗಿಬ್ಯೋನ್ಯರನ್ನು ಹಿಂಸಿಸುವು ದಿಲ್ಲವೆಂದು ಇಸ್ರೇಲರು ಪ್ರಮಾಣ ಮಾಡಿದ್ದರು. ಆದರೆ ಸೌಲನು ಇಸ್ರೇಲಿನ ಮತ್ತು ಯೆಹೂದದ ಜನರ ಮೇಲೆ ಹೆಚ್ಚಿನ ಅಭಿಮಾನವನ್ನಿಟ್ಟಿದ್ದನು. ಆದುದರಿಂದ ಅವನು ಗಿಬ್ಯೋನ್ಯರನ್ನು ಕೊಲ್ಲಲು ಪ್ರಯತ್ನಿಸಿದನು.)

---

**ಮುಖ್ಯ ಸೇವಕನು** ಅಕ್ಷರಶಃ, ‘‘ಯಾಜಕನು.’’

ರಾಜನಾದ ದಾವೀದನು ಗಿಬ್ಯೋನ್ಯರನ್ನು ಒಟ್ಟಾಗಿ
ಕರೆದು ಅವರೊಂದಿಗೆ ಮಾತನಾಡಿದನು. 3ದಾವೀದನು
ಗಿಬ್ಯೋನ್ಯರಿಗೆ, ‘‘ನಾನು ನಿಮಗೆ ಏನು ಮಾಡಲಿ?
ಇಸ್ರೇಲಿನ ಪಾಪವನ್ನು ತೆಗೆದುಹಾಕಲು, ಯೆಹೋವನ
ಜನರನ್ನು ನೀವು ಹರಸಲು, ನಾನು ನಿಮಗೆ ಏನು ಮಾಡ
ಬೇಕು?’’ ಎಂದು ಕೇಳಿದನು.

4ಗಿಬ್ಯೋನ್ಯರು ದಾವೀದನಿಗೆ, ‘‘ಸೌಲನ ಬೆಳ್ಳಿ
ಬಂಗಾರವಾಗಲಿ, ಅವನ ಮನೆಯಾಗಲಿ ನಮಗೆ ಬೇಕಾ
ಗಿಲ್ಲ ಮತ್ತು ಇಸ್ರೇಲಿನ ಯಾವ ವ್ಯಕ್ತಿಯನ್ನೂ ಕೊಲ್ಲಲು
ನಮಗೆ ಹಕ್ಕಿಲ್ಲ’’ ಎಂದು ಹೇಳಿದರು.

ದಾವೀದನು, ‘‘ಆದರೆ ನಿಮಗಾಗಿ ನಾನು ಏನು
ಮಾಡಲಿ?’’ ಎಂದನು.

5ಗಿಬ್ಯೋನ್ಯರು ರಾಜನಾದ ದಾವೀದನಿಗೆ, ‘‘ಸೌಲನು
ನಮ್ಮ ವಿರುದ್ಧ ಯೋಜಿಸಿ ಇಸ್ರೇಲಿನ ದೇಶದಲ್ಲಿ ಉಳಿದಿದ್ದ
ನಮ್ಮ ಜನರನೆಲ್ಲ ನಾಶಪಡಿಸಲು ಪ್ರಯತ್ನಿಸಿದನು.
6ಅವನ ಏಳು ಮಂದಿ ಗಂಡುಮಕ್ಕಳನ್ನು ನಮ್ಮ ಬಳಿಗೆ
ಕಳುಹಿಸು. ಸೌಲನು ವಾಸವಾಗಿದ್ದ ಗಿಬೆಯ ಬೆಟ್ಟದ
ಮೇಲೆ ಯೆಹೋವನ ಸನ್ನಿಧಿಯಲ್ಲಿ ನೇತುಹಾಕುತ್ತೇವೆ’’
ಎಂದು ಹೇಳಿದರು.

ರಾಜನಾದ ದಾವೀದನು, ‘‘ಆ ಗಂಡುಮಕ್ಕಳನ್ನು ನಾನು
ನಿಮಗೆ ಒಪ್ಪಿಸುತ್ತೇನೆ’’ ಎಂದು ಹೇಳಿದನು. 7ಆದರೆ
ಯೋನಾತಾನನ ಮಗನಾದ ಮೆಫೀಬೋಶೆತನನ್ನು
ರಾಜನು ರಕ್ಷಿಸಿದನು. (ಯೋನಾತಾನನು ಸೌಲನ
ಮಗ.) ದಾವೀದನು ಯೆಹೋವನ ಹೆಸರಿನಲ್ಲಿ ಯೋನಾ
ತಾನನಿಗೆ ವಾಗ್ದಾನ ಮಾಡಿದ್ದನು.* ಆದುದರಿಂದ
ಮೆಫೀಬೋಶೆತನಿಗೆ ಅವರಿಂದ ತೊಂದರೆಯಾಗದಂತೆ
ನೋಡಿಕೊಂಡನು.

8ಆದರೆ ರಿಚ್ಪಳಲ್ಲಿ ಹುಟ್ಟಿದ ಸೌಲನ ಗಂಡುಮಕ್ಕಳಾದ
ಅರ್ಮೋನ್ ಮತ್ತು ಮೆಫೀಬೋಶೆತ್* ಎಂಬ ಇಬ್ಬರು
ಗಂಡುಮಕ್ಕಳನ್ನೂ ಮೆಹೋಲದ ಬರ್ಜಿಲ್ಲೈಯ
ಮಗನಾದ ಅದಿಯೇಲನಿಗೆ ಸೌಲನ ಮಗಳಾದ ಮೇರಬ
ಳಲ್ಲಿ ಹುಟ್ಟಿದ ಐದು ಮಂದಿ ಗಂಡುಮಕ್ಕಳನ್ನೂ ತೆಗೆದು
ಕೊಂಡು ಗಿಬ್ಯೋನ್ಯರಿಗೆ ಒಪ್ಪಿಸಿದನು. 9ಗಿಬ್ಯೋನ್ಯರು ಈ
ಏಳು ಮಂದಿ ಗಂಡುಮಕ್ಕಳನ್ನು ಗಿಬೆಯ ಬೆಟ್ಟದ ಮೇಲೆ
ಯೆಹೋವನ ಸನ್ನಿಧಿಯಲ್ಲಿ ನೇತುಹಾಕಿದರು. ಈ ಏಳು
ಮಂದಿ ಒಟ್ಟಿಗೆ ಸತ್ತರು. ಅವರನ್ನು ಸುಗ್ಗಿಯ ಆರಂಭದ
ದಿನಗಳಲ್ಲಿ ಕೊಲ್ಲಲಾಯಿತು. (ಬಾರ್ಲಿಯ ಸುಗ್ಗಿಯು
ಆಗ ತಾನೇ ಆರಂಭವಾಗಿತ್ತು.)

## ರಿಚ್ಪಳು ತನ್ನ ಮಕ್ಕಳ ದೇಹಗಳನ್ನು ಕಾಯುತ್ತಿದ್ದಳು

10ಅಯ್ಯಾಹನ ಮಗಳಾದ ರಿಚ್ಪಳು ಶೋಕವಸ್ತ್ರವನ್ನು
ಕಲ್ಲಿನ ಮೇಲೆ ಹಾಸಿದಳು. ಸುಗ್ಗಿಯ ಆರಂಭದಿಂದ, ಆ
ದೇಹಗಳ ಮೇಲೆ ಮಳೆಯು ಬೀಳುವ ತನಕ, ಆಕೆ ಆ
ವಸ್ತ್ರದ ಮೇಲೆ ಕುಳಿತುಕೊಂಡಳು. ಆಕಾಶದಲ್ಲಿ
ಹಾರಡುವ ಹಕ್ಕಿಗಳು ಹಗಲು ಹೊತ್ತಿನಲ್ಲಿಯೂ ಕಾಡಿನ
ಪ್ರಾಣಿಗಳು ರಾತ್ರಿಯ ಹೊತ್ತಿನಲ್ಲಿಯೂ ತನ್ನ ಮಕ್ಕಳ
ದೇಹಗಳನ್ನು ಮುಟ್ಟಲು ರಿಚ್ಪಳು ಅವಕಾಶಕೊಡಲಿಲ್ಲ.

## ಸೌಲ ಮತ್ತು ಯೋನಾತಾನರ ಮೂಳೆಗಳನ್ನು ದಾವೀದನು ಸಮಾಧಿಮಾಡಿದನು

11ಅಯ್ಯಾಹನ ಮಗಳೂ ಸೌಲನ ದಾಸಿಯೂ ಆದ
ರಿಚ್ಪಳು ಮಾಡುತ್ತಿರುವುದನ್ನು ಜನರು ದಾವೀದನಿಗೆ ತಿಳಿ
ಸಿದರು.

12ಆಗ ದಾವೀದನು ಸೌಲನ ಮತ್ತು ಯೋನಾತಾನನ
ಮೂಳೆಗಳನ್ನು ಯಾಬೇಷ್‌ಗಿಲ್ಯಾದಿಗೆ ತೆಗೆದು ಕೊಂಡು
ಹೋದನು. ಸೌಲ ಮತ್ತು ಯೋನಾತಾನರನ್ನು ಫಿಲಿಷ್ಟಿ
ಯರು ಗಿಲ್ಬೋವದಲ್ಲಿ ಸೋಲಿಸಿದ ನಂತರ ಅವರ
ಶವಗಳನ್ನು ಬೇತ್‌ಷೆಯಾನಿನ ಬೀದಿಯಲ್ಲಿ ತೂಗು
ಹಾಕಿದ್ದರು. ಯಾಬೇಷ್ ಗಿಲ್ಯಾದಿನವರು ಅಲ್ಲಿಂದ ಅವು
ಗಳನ್ನು ಕದ್ದುಕೊಂಡು ಹೋಗಿದ್ದರು.

13ದಾವೀದನು ಯಾಬೇಷ್ ಗಿಲ್ಯಾದಿನಿಂದ ಸೌಲನ
ಮತ್ತು ಅವನ ಮಗನಾದ ಯೋನಾತಾನನ ಮೂಳೆಗಳನ್ನು
ತಂದು ನೇತುಹಾಕಲ್ಪಟ್ಟಿದ್ದ ಸೌಲನ ಏಳು ಮಂದಿ ಮಕ್ಕಳ
ದೇಹಗಳನ್ನು ಜನರು ಒಟ್ಟಾಗಿ ಸೇರಿಸಿದರು. 14ಸೌಲ
ಮತ್ತು ಅವನ ಮಗನಾದ ಯೋನಾತಾನರ ಮೂಳೆಗಳನ್ನು
ಅವರು ಬೆನ್ಯಾಮೀನಿನ ಪ್ರದೇಶದಲ್ಲಿ ಸಮಾಧಿ ಮಾಡಿ
ದರು. ಸೌಲನ ತಂದೆಯಾದ ಕೀಷನ ಸ್ಮಶಾನದಲ್ಲಿ ಈ
ದೇಹಗಳನ್ನು ಜನರು ಸಮಾಧಿ ಮಾಡಿದರು. ರಾಜನು
ಆಜ್ಞಾಪಿಸಿದ್ದನ್ನೆಲ್ಲ ಜನರು ಮಾಡಿದರು. ನಂತರ ಆ
ದೇಶದ ಜನರ ಪ್ರಾರ್ಥನೆಯನ್ನು ದೇವರು ಆಲಿಸಿದನು.

## ಫಿಲಿಷ್ಟಿಯರೊಡನೆ ಯುದ್ಧ

15ಫಿಲಿಷ್ಟಿಯರು ದಾವೀದನೊಡನೆ ಮತ್ತೆ ಯುದ್ಧವನ್ನು
ಮಾಡಿದರು. ದಾವೀದನು ತನ್ನ ಜನರೊಂದಿಗೆ ಫಿಲಿಷ್ಟಿ
ಯರ ವಿರುದ್ಧ ಹೋರಾಡಲು ಹೋದನು. ಆದರೆ
ದಾವೀದನು ಆಯಾಸಗೊಂಡು ಬಲಹೀನನಾದನು.
16ಇಷ್ಬೀಬೆನೋಬನು ಒಬ್ಬ ರಾಕ್ಷಸನ ಮಗ. ಅವನ
ಬರ್ಜಿಯು ಏಳುವರೆ ಪೌಂಡುಗಳಷ್ಟು ತೂಕವಿತ್ತು.
ಅವನು ಹೊಸ ಖಡ್ಗವನ್ನು ಹೊಂದಿದ್ದನು. ಅವನು
ದಾವೀದನನ್ನು ಕೊಲ್ಲುವುದಕ್ಕೆ ಬಂದನು. 17ಆದರೆ
ಚೆರೂಯಳ ಮಗನಾದ ಅಬೀಷೈ ಆ ಫಿಲಿಷ್ಟಿಯನನ್ನು
ಕೊಂದು ದಾವೀದನನ್ನು ರಕ್ಷಿಸಿದನು.

---

**ದಾವೀದನು … ವಾಗ್ದಾನ ಮಾಡಿದ್ದನು** ದಾವೀದ ಮತ್ತು ಯೋನಾತಾನ ಪರಸ್ಪರ ಕೇಡುಮಾಡುವುದಿಲ್ಲವೆಂದು ವಾಗ್ದಾನ ಮಾಡಿದ್ದರು.

**ಮೆಫೀಬೋಶೆತ್** ಇವನು ಯೋನಾತಾನನ ಮಗನಲ್ಲ. ಅದೇ ಹೆಸರಿನ ಬೇರೆಯವನು.

ಆಗ ದಾವೀದನ ಜನರು ಅವನಿಂದ ವಿಶೇಷ ಪ್ರಮಾಣ
ವನ್ನು* ಮಾಡಿಸಿದರು. ಅವರು ಅವನಿಗೆ, ‘‘ನೀನು
ನಮ್ಮೊಂದಿಗೆ ಇನ್ನು ಮೇಲೆ ಯುದ್ಧಕ್ಕೆ ಬರಬಾರದು.
ನೀನು ಯುದ್ಧಕ್ಕೆ ಹೋಗಿ ಕೊಲ್ಲಲ್ಪಟ್ಟರೆ, ಇಸ್ರೇಲಿನ
ಅತ್ಯಂತ ಮಹಾಪುರುಷನನ್ನು ಕಳೆದುಕೊಂಡಂತಾಗು
ತ್ತದೆ’’ ಎಂದು ಹೇಳಿದರು.
18ತರುವಾಯ, ಫಿಲಿಷ್ಟಿಯರೊಡನೆ ಮತ್ತೊಂದು
ಯುದ್ಧವು ಗೋಬ್ ಎಂಬ ಸ್ಥಳದಲ್ಲಿ ನಡೆಯಿತು.
ಹುಷಾದ ಸಿಬ್ಬೆಕೈ ಎನ್ನುವವನು ರೆಫಾಯನಾದ ಸಫ್
ಎಂಬವನನ್ನು ಕೊಂದನು.
19ಆಗ ಗೋಬ್ ಎಂಬ ಸ್ಥಳದಲ್ಲಿ ಫಿಲಿಷ್ಟಿಯರೊಡನೆ
ಮತ್ತೊಂದು ಯುದ್ಧವು ಆರಂಭವಾಯಿತು.
ಯಾರೇಯೋರೆಗೀಮ್ ಎಂಬವನು ಬೆನ್ಯಾಮೀನ್
ಕುಲದವನೂ ಬೇತ್ಲೆಹೇಮಿನವನೂ ಆಗಿದ್ದನು. ಇವನ
ಮಗನಾದ ಎಲ್ಹಾನಾನನು ಗಿತ್ತಿಯನಾದ ಗೊಲ್ಯಾತನನ್ನು
ಕೊಂದನು. ಗೊಲ್ಯಾತನ ಬರ್ಜಿಯು ನೇಕಾರನ
ಕುಂಟೆಯಷ್ಟು ದಪ್ಪವಾಗಿತ್ತು.
20ಗತ್‌ನಲ್ಲಿ ಮತ್ತೆ ಯುದ್ಧವು ನಡೆಯಿತು. ಅಲ್ಲಿ ಬಹಳ
ಎತ್ತರವಾದ ಮನುಷ್ಯನಿದ್ದನು. ಈ ಮನುಷ್ಯನ ಪ್ರತಿ
ಯೊಂದು ಕೈಯಲ್ಲಿ ಆರು ಬೆರಳುಗಳೂ ಪಾದಗಳಲ್ಲಿ ಆರು
ಬೆರಳುಗಳೂ ಇದ್ದವು. (ಅವನಿಗೆ ಒಟ್ಟು ಇಪ್ಪತ್ತನಾಲ್ಕು
ಬೆರಳುಗಳಿದ್ದವು.) ಇವನು ಸಹ ಎತ್ತರವಾದ ಪುರುಷ
ನಾಗಿದ್ದನು. 21ಈ ಮನುಷ್ಯನು ಇಸ್ರೇಲನ್ನು ಪ್ರತಿಭಟಿ
ಸಿದನು. ಆದರೆ ಇವನನ್ನು ಯೋನಾತಾನನು ಕೊಂದನು.
(ಯೋನಾತಾನನು ದಾವೀದನ ಸೋದರನಾದ
ಶಿಮೆಯಾನನ ಮಗ.)
22ಈ ನಾಲ್ಕು ಜನರು ಗತ್ ಊರಿನ ರೆಫಾಯರು.
ಅವರೆಲ್ಲರೂ ದಾವೀದನಿಂದ ಮತ್ತು ಅವನ ಜನರಿಂದ
ಕೊಲ್ಲಲ್ಪಟ್ಟರು.

### ದಾವೀದನು ಯೆಹೋವನಿಗಾಗಿ ರಚಿಸಿದ ಸ್ತುತಿಗೀತೆ

22 ಯೆಹೋವನು ದಾವೀದನನ್ನು ಸೌಲನಿಂದ
ಮತ್ತು ಅವನ ಇತರ ಶತ್ರುಗಳಿಂದ ರಕ್ಷಿಸಿದನು.
ಆ ಸಮಯದಲ್ಲಿ ದಾವೀದನು ಈ ಹಾಡನ್ನು ಹಾಡಿದನು:

2 ಯೆಹೋವನು ನನ್ನ ಬಂಡೆ: ನನ್ನ ಕೋಟೆ; ನನ್ನ
ವಿಮೋಚಕ.
3 ನಾನು ಸಹಾಯಕ್ಕಾಗಿ ದೇವರ ಬಳಿಗೆ ಓಡಿ
ಹೋಗುತ್ತೇನೆ. ಆತನೇ ನನ್ನ ಆಶ್ರಯಗಿರಿ.
ಯೆಹೋವನು ನನ್ನ ಗುರಾಣಿ. ಆತನ ಶಕ್ತಿಯು
ನನ್ನನ್ನು ರಕ್ಷಿಸುತ್ತದೆ. ಯೆಹೋವನು ನಾನು
ಅಡಗಿಕೊಳ್ಳುವ ಸ್ಥಳ; ಬೆಟ್ಟಗಳ ಮೇಲಿರುವ ನನ್ನ
ಸುರಕ್ಷಿತ ಸ್ಥಳ; ಆತನು ನನ್ನನ್ನು ಕ್ರೂರ ಶತ್ರುಗ
ಳಿಂದ ರಕ್ಷಿಸುವನು!
4 ಯೆಹೋವನು ಸ್ತೋತ್ರಕ್ಕೆ ಅರ್ಹನಾಗಿದ್ದಾನೆ.
ನಾನು ಸಹಾಯಕ್ಕಾಗಿ ಯೆಹೋವನನ್ನು ಕರೆ
ಯುವೆನು. ಯೆಹೋವನು ನನ್ನನ್ನು ಶತ್ರುಗಳಿಂದ
ರಕ್ಷಿಸುವನು.
5 ಸಾವಿನ ಅಲೆಗಳು ನನ್ನನ್ನು ಸುತ್ತುವರೆದಿವೆ:
ತೊಂದರೆಗಳು ಪ್ರವಾಹದಂತೆ ನುಗ್ಗಿಬಂದಿವೆ.
ಅವೆಲ್ಲ ನನ್ನಲ್ಲಿ ಭೀತಿಯನ್ನು ಉಂಟುಮಾಡಿವೆ.
6 ಪಾತಾಳದ ಪಾಶಗಳು ನನ್ನನ್ನು ಸುತ್ತು
ವರೆದಿವೆ; ಮರಣಕರವಾದ ಉರುಲುಗಳು
ನನ್ನೆದುರಿನಲ್ಲಿವೆ.
7 ನಾನು ಅವುಗಳಲ್ಲಿ ಸಿಲುಕಿಕೊಂಡಿದ್ದಾಗ
ಯೆಹೋವನಿಗೆ ಪ್ರಾರ್ಥಿಸಿದೆನು. ಹೌದು, ನನ್ನ
ದೇವರಿಗೆ ನಾನು ಮೊರೆಯಿಟ್ಟೆನು; ತನ್ನ ಆಲಯ
ದಲ್ಲಿದ್ದ ಆತನಿಗೆ ನನ್ನ ಸ್ವರ ಕೇಳಿಸಿತು; ಸಹಾಯ
ಕ್ಕಾಗಿ ನಾನಿಟ್ಟ ಮೊರೆಗೆ ಆತನು ಕಿವಿಗೊಟ್ಟನು.
8 ಆಗ ಭೂಮಿಯು ಗಡಗಡನೆ ನಡುಗಿತು. ಪರ
ಲೋಕದ ಅಡಿಪಾಯವು ಅಲುಗಾಡಿತು.
ಏಕೆಂದರೆ ಯೆಹೋವನಿಗೆ ಸಿಟ್ಟೇರಿತ್ತು!
9 ಆತನ ಮೂಗಿನ ಹೊಳ್ಳೆಗಳಿಂದ ಹೊಗೆಯು ಹೊರ
ಬಂದಿತು. ಬೆಂಕಿಕಿಡಿಯ ಜ್ವಾಲೆಗಳು ಆತನ
ಬಾಯಿಂದ ಹೊರಬಂದವು; ದಹಿಸುವ ಬೆಂಕಿಯು
ಆತನ ಬಾಯೊಳಗಿಂದ ಬಂದಿತು.
10 ಯೆಹೋವನು ಆಕಾಶವನ್ನು ಇಬ್ಭಾಗಮಾಡಿ ಕೆಳ
ಗಿಳಿದು ಬಂದನು! ಆತನ ಕಾಲಕೆಳಗೆ ಕತ್ತಲೆ
ಕವಿದಿತ್ತು.
11 ಯೆಹೋವನು ಕೆರೂಬಿಗಳ ಮೇಲೆ ಕುಳಿತು,
ಹಾರಿದನು. ಹೌದು, ಗಾಳಿಯ ರೆಕ್ಕೆಗಳಲ್ಲಿ ಆತನು
ಕುಳಿತು ಹಾರುವುದನ್ನು ಜನರು ನೋಡಿದರು!
12 ಯೆಹೋವನು ಕಾರ್ಮೋಡಗಳನ್ನೇ ತನ್ನ
ಸುತ್ತಲೂ ಗುಡಾರದಂತಾಗಿಸಿಕೊಂಡನು. ಆತನು
ಆಕಾಶದ ನೀರನ್ನು, ಗುಡುಗುವ ದೊಡ್ಡ ಮೋಡ
ಗಳನ್ನು ತನ್ನ ಸುತ್ತಲೂ ಕವಿಸಿಕೊಂಡನು.
13 ಉರಿಯುವ ಕಲ್ಲಿದ್ದಲಿನಂತಿದ್ದ ಕಿಡಿಗಳು ಆತನ
ಸುತ್ತಲೂ ಇದ್ದ ಬೆಳಕಿನಿಂದ ಬಂದವು.
14 ಯೆಹೋವನು ಸ್ವರ್ಗದಿಂದ ಗುಡುಗಿದನು!
ಸರ್ವೋನ್ನತನಾದ ದೇವರು ತನ್ನ ಸ್ವರ ಕೇಳುವಂತೆ
ಮಾಡಿದನು.
15 ಯೆಹೋವನಿಂದ ಹೊರಟ ಬಾಣಗಳು ಶತ್ರು
ಗಳನ್ನು ಚೆಲ್ಲಾಪಿಲ್ಲಿಯಾಗಿ ಮಾಡಿದವು. ಆತನು

**ವಿಶೇಷ ಪ್ರಮಾಣ** ದೇವರಿಗೆ ಮಾಡುವ ವಿಶೇಷ ಪ್ರಮಾಣ.

ಸಿಡಿಲನ್ನು ಉಂಟುಮಾಡಿದನು, ಜನರು ಭೀತಿ
ಯಿಂದ ಓಡಿ ಹೋದರು.
16 ಯೆಹೋವನೇ, ನೀನು ಗದರಿಸಿದಾಗ ನಿನ್ನ
ಬಾಯಿಂದ ಪ್ರಬಲವಾದ ಗಾಳಿಯು ಬೀಸಿತು;
ನೀರು ಹಿಂದಕ್ಕೆ ತಳ್ಳಲ್ಪಟ್ಟಿತು. ಸಮುದ್ರದ ತಳವೂ
ಭೂಮಿಯ ಅಡಿಪಾಯವೂ ಕಣ್ಣಿಗೆ ಗೋಚರ
ವಾದವು.
17 ಯೆಹೋವನು ಆಕಾಶದಿಂದ ಕೆಳಗಿಳಿದನು.
ಆತನು ನನ್ನನ್ನು ಹಿಡಿದುಕೊಂಡು ನನ್ನನ್ನು ನೀರಿ
ನಡಿಯಿಂದ ಮೇಲಕ್ಕೆತ್ತಿದನು.
18 ನನ್ನನ್ನು ದ್ವೇಷಿಸುತ್ತಿದ್ದ ಶತ್ರುಗಳಿಂದ ಆತನೇ ರಕ್ಷಿಸಿ
ದನು. ನನ್ನ ಶತ್ರುಗಳು ನನಗಿಂತಲೂ ಬಹಳ
ಬಲಿಷ್ಠರೂ ಸೊಕ್ಕಿದವರೂ ಆಗಿದ್ದರು. ಅವರ
ಕೈಯಿಂದ ಆತನೇ ನನ್ನನ್ನು ರಕ್ಷಿಸಿದನು.
19 ಶತ್ರುಗಳು ನನಗೆ ಮುತ್ತಿಗೆ ಹಾಕಿದಾಗ ನಾನು
ತೊಂದರೆಯಲ್ಲಿದ್ದೆನು. ಆದರೆ ನನಗೆ ಸಹಾಯ
ವನ್ನು ನೀಡಲು ಯೆಹೋವನೇ ಅಲ್ಲಿದ್ದನು.
20 ಯೆಹೋವನು ನನ್ನನ್ನು ಸುರಕ್ಷಿತವಾದ ಸ್ಥಳಕ್ಕೆ
ತಂದನು. ಆತನು ನನ್ನನ್ನು ಪ್ರೀತಿಸಿ ರಕ್ಷಿಸಿದನು.
21 ಯೆಹೋವನು ನನಗೆ ಪ್ರತಿಫಲ ಕೊಡುವನು,
ಏಕೆಂದರೆ ನಾನು ನೀತಿಗನುಸಾರವಾಗಿ ಮಾಡಿ
ದೆನು. ಯೆಹೋವನು ನನಗೆ ಕೊಡುಗೆಗಳನ್ನು
ಕೊಡುವನು, ಏಕೆಂದರೆ ನನ್ನ ಕೈಗಳು ದುಷ್ಟತನ
ದಿಂದ ಮುಕ್ತವಾಗಿವೆ.
22 ಏಕೆಂದರೆ ಯೆಹೋವನ ಮಾರ್ಗಕ್ಕೆ ನಾನು
ವಿಧೇಯನಾಗಿದ್ದೇನೆ! ನನ್ನ ದೇವರ ವಿರುದ್ಧ ನಾನು
ಪಾಪವನ್ನು ಮಾಡಲಿಲ್ಲ.
23 ನಾನು ಯೆಹೋವನ ಆಜ್ಞೆಗಳನ್ನು ಯಾವಾಗಲೂ
ಜ್ಞಾಪಿಸಿಕೊಳ್ಳುವೆನು. ನಾನು ಆತನ ಕಟ್ಟಳೆಗಳನ್ನು
ಪಾಲಿಸುವೆನು!
24 ನಾನು ದೋಷಿಯಲ್ಲವೆಂಬುದು ಆತನಿಗೆ ತಿಳಿದಿದೆ.
ನಾನು ಪಾಪದಲ್ಲಿ ಬೀಳದಂತೆ ಎಚ್ಚರಿಕೆ
ವಹಿಸಿದೆನು.
25 ನಾನು ಒಳ್ಳೆಯದನ್ನೇ ಮಾಡಿದೆನು. ಯೆಹೋವನ
ದೃಷ್ಟಿಯಲ್ಲಿ ನಾನು ತಪ್ಪೇನೂ ಮಾಡಲಿಲ್ಲ, ಆದ್ದ
ರಿಂದ ಆತನು ನನಗೆ ಪ್ರತಿಫಲ ಕೊಡುವನು!
26 ನಿನ್ನನ್ನು ಪ್ರೀತಿಸುವವರನ್ನು ನೀನು ಪ್ರೀತಿಸುತ್ತಿ.
ನಿನ್ನ ಮುಂದೆ ದೋಷವಿಲ್ಲದವನಾಗಿ ನಡೆಯು
ವವನಿಗೆ ನಿರ್ದೋಷಿಯಾಗಿರುತ್ತಿ.
27 ಯೆಹೋವನೇ, ನೀನು ಪರಿಶುದ್ಧರಿಗೆ ಪರಿಶುದ್ಧ
ನಾಗಿರುವೆ; ಮೋಸಗಾರರಿಗೆ ಜಾಣನಾಗಿರುವೆ.
28 ಯೆಹೋವನೇ, ನನ್ನ ದೀನರನ್ನು ಮೇಲಕ್ಕೆತ್ತುವೆ;
ಗರ್ವಿಷ್ಠರನ್ನಾದರೊ ತುಳಿದುಬಿಡುವೆ.
29 ಯೆಹೋವನೇ, ನನ್ನ ದೀಪವು ನೀನೇ. ಆತನು
ನನಗೆ ಬೆಳಕು ಕೊಟ್ಟು ನನ್ನ ಸುತ್ತಲಿನ ಅಂಧಕಾರ
ವನ್ನು ಪ್ರಕಾಶಮಯವಾಗುವಂತೆ ಮಾಡುವನು.
30 ಯೆಹೋವನೇ, ನಿನ್ನ ಸಹಾಯದಿಂದಲೇ, ನಾನು
ವೈರಿಗಳ ಮೇಲೆ ಬೀಳುವೆನು. ನಿನ್ನ ಸಹಾಯ
ದಿಂದಲೇ ನಾನು ಶತ್ರುಗಳ ಗೋಡೆಗಳನ್ನು ಹತ್ತ
ಬಲ್ಲೆನು.
31 ದೇವರ ಶಕ್ತಿಯು ಪರಿಪೂರ್ಣವಾದದ್ದು.
ಯೆಹೋವನ ಮಾತು ಪರೀಕ್ಷಿಸಲ್ಪಟ್ಟದ್ದು; ಆತನು
ತನ್ನಲ್ಲಿ ಭರವಸವಿಟ್ಟವರನ್ನು ಸಂರಕ್ಷಿಸುತ್ತಾನೆ.
32 ಯೆಹೋವನ ಹೊರತು ಬೇರೆ ದೇವರಿಲ್ಲ. ನಮ್ಮ
ದೇವರ ಹೊರತು ಬೇರೆ ಬಂಡೆಯಿಲ್ಲ.
33 ಯೆಹೋವನು ನನ್ನ ಬಲವೂ ಕೋಟೆಯೂ
ಆಗಿದ್ದಾನೆ. ಆತನು ನನ್ನ ಮಾರ್ಗವನ್ನು ದೋಷ
ವಿಲ್ಲದ್ದಾಗಿ ಮಾಡುತ್ತಾನೆ.
34 ನಾನು ಉನ್ನತ ಪ್ರದೇಶಗಳಲ್ಲಿ ನಿಲ್ಲುವಂತೆ ಆತನು
ನನ್ನ ಕಾಲುಗಳನ್ನು ಜಿಂಕೆಯ ಕಾಲುಗಳಂತೆ
ಮಾಡುತ್ತಾನೆ.
35 ಆತನು ಯುದ್ಧಕ್ಕಾಗಿ ನನ್ನನ್ನು ತರಬೇತುಗೊಳಿಸು
ವನು. ಆದುದರಿಂದ ನನ್ನ ತೋಳುಗಳು
ಹಿತ್ತಾಳೆಯ ಬಿಲ್ಲನ್ನೂ ಬಗ್ಗಿಸಬಲ್ಲವು.
36 ದೇವರೇ ನೀನು ನನ್ನನ್ನು ಸಂರಕ್ಷಿಸಿ ಜಯ
ಹೊಂದಲು ನನಗೆ ಸಹಾಯಮಾಡಿರುವೆ. ನನ್ನ
ಶತ್ರುವನ್ನು ಸೋಲಿಸಲು ನೀನು ನನಗೆ ಸಹಾಯ
ಮಾಡಿರುವೆ.
37 ನನ್ನ ಕಾಲುಗಳನ್ನೂ ಕೀಲುಗಳನ್ನೂ ಬಲಗೊಳಿಸು;
ಆಗ ನಾನು ಎಡವದೆ ವೇಗವಾಗಿ ನಡೆಯಬಲ್ಲೆನು.
38 ನಾನು ನನ್ನ ಶತ್ರುಗಳನ್ನು ಅಟ್ಟಿಸಿಕೊಂಡು
ಹೋದೆನು. ನಾನು ಅವರನ್ನು ನಾಶಗೊಳಿಸಿದೆನು!
ನಾನು ನನ್ನ ಶತ್ರುಗಳನ್ನು ನಾಶಗೊಳಿಸುವ ತನಕ
ಹಿಂದಿರುಗುವುದಿಲ್ಲ.
39 ನಾನು ನನ್ನ ಶತ್ರುಗಳನ್ನು ನಾಶಗೊಳಿಸಿದೆನು!
ನಾನು ಅವರನ್ನು ಸಂಪೂರ್ಣವಾಗಿ ನಾಶಗೊಳಿಸಿ
ದೆನು. ಅವರು ಮತ್ತೆ ಮೇಲೇಳುವುದಿಲ್ಲ. ಹೌದು,
ನನ್ನ ಶತ್ರುಗಳು ನನ್ನ ಪಾದಗಳ ಕೆಳಗೆ ಬಿದ್ದಿದ್ದಾರೆ.
40 ದೇವರೇ, ಏಕೆಂದರೆ ನೀನು ನನ್ನನ್ನು ಯುದ್ಧಕ್ಕಾಗಿ
ಬಲಪಡಿಸಿರುವೆ. ನನ್ನ ಶತ್ರುಗಳನ್ನು ನನಗೆ
ಅಧೀನರಾಗುವಂತೆ ಮಾಡಿರುವೆ.
41 ನನ್ನ ಶತ್ರುಗಳು ಓಡಿಹೋಗಲು ನೀನೇ ಕಾರಣ.
ಆದ್ದರಿಂದಲೇ ನನ್ನನ್ನು ದ್ವೇಷಿಸಿದ ಜನರನ್ನು ನಾನು
ನಾಶ ಮಾಡಿದೆನು.

42 ನನ್ನ ಶತ್ರುಗಳು ಸಹಾಯಕ್ಕಾಗಿ ನೋಡಿದರು.
ಆದರೆ ಅವರನ್ನು ರಕ್ಷಿಸಲು ಅಲ್ಲಿ ಯಾರೂ
ಇರಲಿಲ್ಲ. ಅವರು ಯೆಹೋವನ ಕಡೆಗೂ
ನೋಡಿದರು; ಆದರೆ ಆತನು ಅವರಿಗೆ ಉತ್ತರ
ಕೊಡಲಿಲ್ಲ.
43 ನಾನು ನನ್ನ ಶತ್ರುಗಳನ್ನು ಚೂರುಚೂರಾಗಿ
ಕತ್ತರಿಸಿ ಹಾಕಿದೆ. ಅವರು ನೆಲದ ಮೇಲಿನ ಧೂಳಿ
ನಂತಾದರು. ನನ್ನ ಶತ್ರುಗಳನ್ನು ರಸ್ತೆಯಲ್ಲಿನ
ಮಣ್ಣಿನಂತಾಗುವವರೆಗೆ ತುಳಿದುಬಿಟ್ಟೆನು.
44 ಜನರು ನನ್ನ ವಿರುದ್ಧ ವಾದಿಸಿದಾಗ ನೀನು ನನ್ನನ್ನು
ರಕ್ಷಿಸಿದೆ. ನೀನು ನನ್ನನ್ನು ಜನಾಂಗಗಳಿಗೆ ಅಧಿಪತಿ
ಯನ್ನಾಗಿ ಮಾಡಿದೆ. ನಾನು ತಿಳಿಯದ ಜನರೂ
ನನ್ನ ಸೇವೆಮಾಡುತ್ತಾರೆ!
45 ಅನ್ಯದೇಶದ ಜನರೂ ನನಗೆ ವಿಧೇಯರಾಗಿರು
ವರು! ಅವರು ನನ್ನ ಬಗ್ಗೆ ಕೇಳಿದಾಗ, ತಕ್ಷಣವೇ
ನನಗೆ ವಿಧೇಯರಾಗುವರು! ಆ ಪರದೇಶಿಯರು
ನನಗೆ ಭಯಪಡುವರು.
46 ಅನ್ಯದೇಶದ ಜನರು ಭಯಗೊಳ್ಳುವರು; ತಾವು
ಅಡಗಿದ್ದ ಸ್ಥಳಗಳಿಂದ ನಡುಗುತ್ತಾ ಹೊರ
ಬರುವರು.

47 ಯೆಹೋವನು ಜೀವಸ್ವರೂಪನಾಗಿದ್ದಾನೆ. ನನ್ನ
ಬಂಡೆಗೆ ಸ್ತೋತ್ರವಾಗಲಿ. ಯೆಹೋವನು
ಮಹೋನ್ನತನು! ನನ್ನನ್ನು ರಕ್ಷಿಸುವ ಬಂಡೆಯಾ
ದಾತನಿಗೆ ಸ್ತುತಿಯುಂಟಾಗಲಿ.
48 ನನ್ನ ಶತ್ರುಗಳನ್ನು ನನಗಾಗಿ ದಂಡಿಸುವ ದೇವರು
ಆತನೇ. ಆತನು ಜನರನ್ನು ನನ್ನ ಅಧೀನತೆಗೆ ಒಳ
ಪಡಿಸುವನು.
49 ನನ್ನ ಶತ್ರುಗಳಿಂದ ನನ್ನನ್ನು ಸ್ವತಂತ್ರನಾಗಿಸುವವನು
ದೇವರೇ. ಹೌದು, ನೀನು ನನ್ನನ್ನು ನನ್ನ ಶತ್ರುಗ
ಳಿಂದ ತಪ್ಪಿಸಿ ಮೇಲಕ್ಕೇರಿಸುವೆ. ನನ್ನನ್ನು ಹಿಂಸಿಸ
ಬೇಕೆನ್ನುವ ಮನುಷ್ಯನಿಂದ ನೀನು ನನಗೆ ರಕ್ಷಣೆ
ನೀಡುವೆ.
50 ಯೆಹೋವನೇ, ಈ ಕಾರಣದಿಂದಲೇ ನಾನು ಪರ
ಜನರ ಮಧ್ಯದಲ್ಲಿ ನಿನ್ನನ್ನು ಸ್ತುತಿಸುವೆನು. ಈ
ಕಾರಣದಿಂದಲೇ ನಿನ್ನ ಹೆಸರಿನ ಮೇಲೆ ಹಾಡು
ಗಳನ್ನು ಹಾಡುವೆನು.
51 ಯೆಹೋವನು ತಾನು ನೇಮಿಸಿದ ರಾಜನಿಗೆ
ಸಹಾಯಮಾಡಿ ಯುದ್ಧಗಳಲ್ಲಿ ಜಯ ದಯ
ಪಾಲಿಸುವನು. ಯೆಹೋವನು ನನ್ನ ರಕ್ಷಣಾ
ದುರ್ಗವಾಗಿದ್ದಾನೆ. ಯೆಹೋವನು ತಾನು ಅಭಿ
ಷೇಕಿಸಿದ ರಾಜನಿಗೆ ಪ್ರೀತಿಯನ್ನು ಮತ್ತು
ದಯೆಯನ್ನು ತೋರುವನು. ದಾವೀದ ನಿಗೆ ಮತ್ತು
ಅವನ ಸಂತತಿಯವರಿಗೆ ಆತನು ಎಂದೆಂದಿಗೂ ಕೃಪೆ
ತೋರಿಸುವವನಾಗಿದ್ದಾನೆ.

### ದಾವೀದನ ಕೊನೆಯ ಮಾತುಗಳು

23 ಇವು ಇಷಯನ ಮಗನಾದ ದಾವೀದನ
ಕೊನೆಯ ಮಾತುಗಳು:

ದಾವೀದನು ಈ ಹಾಡನ್ನು ಹಾಡಿದನು: ದೇವ
ರಿಂದ ಉನ್ನತಿಗೇರಿಸಲ್ಪಟ್ಟವನ ಸಂದೇಶವಿದು.
ಯಾಕೋಬನ ದೇವರಿಂದ ಆರಿಸಲ್ಪಟ್ಟ ರಾಜನೇ
ಅವನು. ಅವನು ಇಸ್ರೇಲಿನ ಒಳ್ಳೆಯ ಹಾಡುಗಾರ.
2 ಯೆಹೋವನ ಆತ್ಮವು ನನ್ನ ಮೂಲಕ ಮಾತ
ನಾಡಿತು. ಆತನ ನುಡಿಗಳು ನನ್ನ ನಾಲಿಗೆಯ
ಮೇಲಿವೆ.
3 ಇಸ್ರೇಲಿನ ದೇವರು ಮಾತನಾಡಿದನು. ಇಸ್ರೇಲಿನ
ಬಂಡೆಯಾದಾತನು ನನಗೆ ತಿಳಿಸಿದನು.
‘‘ಯೆಹೋವನಲ್ಲಿ ಭಯಭಕ್ತಿಯನ್ನಿಟ್ಟು ಜನರನ್ನು
ನ್ಯಾಯವಾಗಿ ಆಳುವ
4 ವ್ಯಕ್ತಿಯು ಹೊತ್ತಾರೆಯ ಬೆಳಕಿನ ಕಿರಣಗ
ಳಂತೆಯೂ ಮೋಡಗಳೇ ಇಲ್ಲದ ಮುಂಜಾನೆ
ಯಂತೆಯೂ ಮಳೆ ಬಿದ್ದನಂತರ ಬರುವ
ಸೂರ್ಯನ ಬೆಳಕಿನಂತೆಯೂ ಗರಿಕೆಯನ್ನು ನೆಲ
ದಿಂದ ಮೂಡಿಸುವ ಮಳೆಯಂತೆಯೂ ಇದ್ದಾನೆ.’’
5 ದೇವರು ನನ್ನ ಕುಟುಂಬವನ್ನು ಸ್ಥಿರಗೊಳಿಸಿದನು.
ಆತನು ನನ್ನೊಡನೆ ಶಾಶ್ವತವಾದ ಒಡಂಬಡಿಕೆ
ಯನ್ನು ಮಾಡಿಕೊಂಡನು. ಆತನು ಈ ಒಡಂ
ಬಡಿಕೆಯನ್ನು ಸಂಪೂರ್ಣವಾಗಿ ಸುಭದ್ರಗೊಳಿಸಿ
ದನು. ಆತನು ನನಗೆ ಎಲ್ಲೆಲ್ಲಿಯೂ ಜಯ
ಕೊಡುವನು. ಆತನು ನನಗೆ ಬೇಕಾದದ್ದನ್ನೆಲ್ಲಾ
ಕೊಡುವನು.
6 ಆದರೆ ಕೆಟ್ಟಜನರೆಲ್ಲರೂ ಮುಳ್ಳುಗಳಂತಿದ್ದಾರೆ.
ಜನರು ಮುಳ್ಳುಗಳನ್ನು ಹಿಡಿದುಕೊಳ್ಳುವುದಿಲ್ಲ;
ಅವರು ಅವುಗಳನ್ನು ಎಸೆದುಬಿಡುವರು.
7 ಒಬ್ಬ ವ್ಯಕ್ತಿಯು ಅವುಗಳನ್ನು ಮುಟ್ಟಿದ್ದರೆ, ಅದು,
ಮರದ ಮತ್ತು ಕಬ್ಬಿಣದ ಕತ್ತಿಗಳಿಂದ ಚುಚ್ಚಿ
ದಂತಾಗುತ್ತದೆ. ಆ ಜನರು ಮುಳ್ಳುಗಳಂತಿದ್ದಾರೆ.
ಅವರನ್ನು ಬೆಂಕಿಯಲ್ಲಿ ಎಸೆದು ಸಂಪೂರ್ಣವಾಗಿ
ಸುಟ್ಟುಬಿಡುವರು!

### ದಾವೀದನ ಶೂರ ಸೈನಿಕರು

8 ದಾವೀದನ ಸೈನಿಕರ ಹೆಸರುಗಳು ಹೀಗಿವೆ:
ತಹ್ಕೆಮೋನ್ಯನಾದ ಯೋಷೆಬಷ್ಷೆಬೆತನು. ಮೂವರು
ವೀರರಿಗೆ ಯೋಷೆಬಷ್ಷೆಬೆತನು ಮುಖ್ಯಸ್ಥನಾಗಿದ್ದನು.
ಅವನನ್ನು ಎಚ್ನೀಯನಾದ ಅದೀನೋ ಎಂದೂ

ಕರೆಯುತ್ತಿದ್ದರು. ಯೋಷೆಬಷ್ಷೆಬೆತನು ಏಕಕಾಲದಲ್ಲಿ
ಎಂಟು ನೂರು ಜನರನ್ನು ಕೊಂದನು.
9ಎರಡನೆಯವನು ಅಹೋಹ್ಯನಾದ ದೋದೋ
ಎಂಬವನ ಮಗನಾದ ಎಲ್ಲಾಜಾರ. ದಾವೀದನು ಫಿಲಿಷ್ಟಿ
ಯರನ್ನು ಎದುರಿಸಿದ ಸಮಯದಲ್ಲಿ ಅವನೊಂದಿಗಿದ್ದ
ಮೂರು ಮಂದಿ ವೀರರಲ್ಲಿ ಎಲ್ಲಾಜಾರನು ಒಬ್ಬ
ನಾಗಿದ್ದನು. ಫಿಲಿಷ್ಟಿಯರು ಯುದ್ಧಕ್ಕೆ ಕೂಡಿಬಂದಾಗ,
ಇಸ್ರೇಲ್ ಸೈನಿಕರು ಓಡಿಹೋಗಿದ್ದರು.10ಎಲ್ಲಾಜಾರನು
ಆಯಾಸಗೊಳ್ಳುವ ತನಕ ಫಿಲಿಷ್ಟಿಯರೊಡನೆ ಹೋರಾಡಿ
ದನು. ಆದರೆ ಅವನು ತನ್ನ ಕೈಸೋತು ಹೋಗುವವರೆಗೂ
ಫಿಲಿಷ್ಟಿಯರನ್ನು ಕೊಂದನು. ಯೆಹೋವನು ಇಸ್ರೇಲರಿಗೆ
ಅಂದು ಮಹಾವಿಜಯವನ್ನು ಉಂಟುಮಾಡಿದನು.
ಎಲ್ಲಾಜಾರನು ಯುದ್ಧದಲ್ಲಿ ವಿಜಯಿಯಾದ ಮೇಲೆ
ಜನರು ಹಿಂದಿರುಗಿದರು. ಆದರೆ ಅವರು ಶತ್ರುಗಳಿಂದ
ಬೆಲೆಬಾಳುವ ವಸ್ತುಗಳನ್ನು ಅಪಹರಿಸಲು ಮಾತ್ರವೇ
ಬಂದಿದ್ದರು.
11ಮೂರನೆಯವನು, ಹರಾರ್ಯನಾದ ಆಗೇಯನ
ಮಗನಾದ ಶಮ್ಮ. ಫಿಲಿಷ್ಟಿಯರು ಒಟ್ಟಾಗಿ ಬಂದು ಅಲ
ಸಂದಿಯ ಹೊಲದಲ್ಲಿ ಹೋರಾಡಿದರು. ಇಸ್ರೇಲರು
ಫಿಲಿಷ್ಟಿಯರಿಂದ ಓಡಿಹೋದರು. 12ಆದರೆ ಶಮ್ಮನು
ಹೊಲದ ಮಧ್ಯಭಾಗದಲ್ಲಿ ನಿಂತು ಅದನ್ನು ಉಳಿಸಿ
ಕೊಂಡನು. ಅವನು ಫಿಲಿಷ್ಟಿಯರನ್ನು ಕೊಂದನು. ಆ
ಸಮಯದಲ್ಲಿ ಯೆಹೋವನು ಮಹಾವಿಜಯವನ್ನು
ಕೊಟ್ಟನು.

## ಮೂವರು ಪ್ರಧಾನ ಪರಾಕ್ರಮಿಗಳು

13ಸುಗ್ಗಿಯ ಕಾಲದ ಒಂದು ಸಮಯದಲ್ಲಿ ಮೂವತ್ತು
ಮಂದಿ ಶೂರರಲ್ಲಿ* ಮೂವರು ದಾವೀದನ ಬಳಿಗೆ
ಬಂದರು. ಈ ಮೂವರು ಅದುಲ್ಲಾಮ್ ಗವಿಗೆ ಬಂದರು.
ಫಿಲಿಷ್ಟಿಯರ ಸೈನ್ಯವು ರೆಫಾಯೀಮ್ ಕಣಿವೆಯಲ್ಲಿ ತನ್ನ
ಪಾಳೆಯವನ್ನು ಮಾಡಿಕೊಂಡಿತ್ತು.
14ಆ ಸಮಯದಲ್ಲಿ ದಾವೀದನು ಕೋಟೆಯಲ್ಲಿದ್ದನು.
ಫಿಲಿಷ್ಟಿಯ ಸೈನಿಕರಲ್ಲಿ ಕೆಲವರು ಬೇತ್ಲೆಹೇಮಿನಲ್ಲಿದ್ದರು.
15ದಾವೀದನಿಗೆ ತನ್ನ ಸ್ವಸ್ಥಳದ ನೀರನ್ನು ಕುಡಿಯಲು ಅತಿ
ಯಾಸೆಯಾಯಿತು. ದಾವೀದನು ‘‘ಬೇತ್ಲೆಹೇಮ್ ನಗರ
ದ್ವಾರದ ಬಾವಿಯಿಂದ ಯಾರಾದರೂ ನೀರನ್ನು ನನಗೆ
ತಂದುಕೊಟ್ಟರೆ ಎಷ್ಟು ಚೆನ್ನಾಗಿರುವುದು’’ ಎಂದು
ಹೇಳಿದನು.
16ಆದರೆ ಈ ಮೂವರು ಪರಾಕ್ರಮಿಗಳು ಫಿಲಿಷ್ಟಿಯ
ಸೈನ್ಯದಲ್ಲಿ ನುಗ್ಗಿಹೋಗಿ, ಬೇತ್ಲೆಹೇಮ್ ನಗರದ್ವಾರದ
ಬಾವಿಯಿಂದ ನೀರನ್ನು ತಂದುಕೊಟ್ಟರು. ಆದರೆ
ದಾವೀದನು ಆ ನೀರನ್ನು ಕುಡಿಯಲು ನಿರಾಕರಿಸಿದನು.
ಆ ನೀರನ್ನು ಅವನು ಯೆಹೋವನ ಸನ್ನಿಧಿಯಲ್ಲಿ ಸುರಿದು,
17‘‘ಯೆಹೋವನೇ, ನಾನು ಈ ನೀರನ್ನು ಕುಡಿಯುವು
ದಿಲ್ಲ. ನಾನು ಈ ನೀರನ್ನು ಕುಡಿದರೆ, ನನಗಾಗಿ ತಮ್ಮ
ಪ್ರಾಣಗಳನ್ನೇ ಆಪತ್ತಿಗೀಡುಮಾಡಿಕೊಂಡಿದ್ದ ಜನರ
ರಕ್ತವನ್ನು ಕುಡಿದಂತಾಗುತ್ತದೆ’’ ಎಂದು ಹೇಳಿದನು. ಈ
ಕಾರಣದಿಂದಲೇ ದಾವೀದನು ಆ ನೀರನ್ನು ಕುಡಿಯಲು
ನಿರಾಕರಿಸಿದನು. ಈ ಮೂವರು ಪರಾಕ್ರಮಿಗಳು ಈ
ರೀತಿಯ ಅನೇಕ ಕಾರ್ಯಗಳನ್ನು ಮಾಡಿದರು.
18ಚೆರೂಯಳ ಮಗನೂ ಯೋವಾಬನ ಸೋದರನೂ
ಆದ ಅಬೀಷೈಯನು ಈ ಮೂವರು ಪರಾಕ್ರಮಿಗಳಿಗೆ
ನಾಯಕನು. ಅಬೀಷೈಯನು ಮುನ್ನೂರು ಮಂದಿ
ಶತ್ರುಗಳ ವಿರುದ್ಧ ತನ್ನ ಬರ್ಜಿಯನ್ನು ಬಳಸಿ ಅವರನ್ನು
ಕೊಂದನು. ಅವನೂ ಈ ಮೂವರಂತೆಯೇ ಪ್ರಸಿದ್ಧ
ನಾದನು. 19ಅಬೀಷೈಯನು ಈ ಮೂವರಿಗಿಂತಲೂ
ಹೆಚ್ಚು ಗೌರವಕ್ಕೆ ಪಾತ್ರನಾದನು. ಅವನು ಈ ಮೂವರಿಗೆ
ನಾಯಕನಾದನು. ಆದರೆ ಅವನು ಈ ಮೂವರಲ್ಲಿ
ಒಬ್ಬನಾಗಿರಲಿಲ್ಲ.
20ಯೆಹೋಯಾದಾವನ ಮಗನಾದ ಬೆನಾಯನು
ಅವರಲ್ಲಿ ಒಬ್ಬನು. ಅವನು ಬಲಿಷ್ಠ ವ್ಯಕ್ತಿಯಾಗಿದ್ದನು.
ಅವನು ಕಬ್ಜಯೇಲಿನವನಾಗಿದ್ದನು. ಬೆನಾಯನು ಅನೇಕ
ಶೌರ್ಯದ ಕಾರ್ಯಗಳನ್ನು ಮಾಡಿದನು. ಬೆನಾಯನು
ಮೋವಾಬ್ಯನಾದ ಅರೀಯೇಲನ ಇಬ್ಬರು ಮಕ್ಕಳನ್ನು
ಕೊಂದನು. ಬೆನಾಯನು ಮಂಜುಸುರಿಯುವಾಗ ಒಂದು
ತಗ್ಗಿನಲ್ಲಿ ಇಳಿದು ಸಿಂಹವನ್ನು ಕೊಂದನು. 21ಬೆನಾಯನು
ವೀರ ಯೋಧನಾದ ಈಜಿಪ್ಟಿನವನೊಬ್ಬನನ್ನು
ಕೊಂದನು. ಈಜಿಪ್ಟಿನವನ ಕೈಯಲ್ಲಿ ಒಂದು ಬರ್ಜಿ
ಯಿತ್ತು. ಬೆನಾಯನ ಕೈಯಲ್ಲಿ ಒಂದು ಲಾಠಿ ಮಾತ್ರವೇ
ಇದ್ದಿತು. ಬೆನಾಯನು ಈಜಿಪ್ಟಿನವನ ಕೈಯಲ್ಲಿದ್ದ ಬರ್ಜಿ
ಯನ್ನು ಕಿತ್ತುಕೊಂಡು ಆ ಬರ್ಜಿಯಿಂದಲೇ ಅವನನ್ನು
ಕೊಂದುಬಿಟ್ಟನು. 22 ಯೆಹೋಯಾದಾವನ ಮಗನಾದ
ಬೆನಾಯನು ಈ ರೀತಿಯ ಅನೇಕ ಕಾರ್ಯಗಳನ್ನು ಮಾಡಿ
ದನು. ಬೆನಾಯನು ಆ ಮೂವರು ಪರಾಕ್ರಮಿಗಳಷ್ಟೇ
ಪ್ರಸಿದ್ಧನಾಗಿದ್ದನು. 23ಬೆನಾಯನು ಮೂವತ್ತು ಮಂದಿ
ಪರಾಕ್ರಮಿಗಳಿಗಿಂತ ಹೆಚ್ಚು ಗೌರವಕ್ಕೆ ಪಾತ್ರನಾದರೂ ಆ
ಮೂವರು ಪರಾಕ್ರಮಿಗಳಲ್ಲಿ ಒಬ್ಬನಾಗಿರಲಿಲ್ಲ.
ದಾವೀದನು ತನ್ನ ಅಂಗರಕ್ಷಕ ಪಡೆಯ ನಾಯಕನನ್ನಾಗಿ
ಬೆನಾಯನನ್ನು ನೇಮಿಸಿದನು.

## ಮೂವತ್ತು ಮಂದಿ ಪರಾಕ್ರಮಿಗಳು

24ಯೋವಾಬನ ಸೋದರನಾದ ಅಸಾಹೇಲನು
ಮೂವತ್ತು ಮಂದಿ ಪರಾಕ್ರಮಿಗಳಲ್ಲಿ ಒಬ್ಬನಾಗಿದ್ದನು.

---

**ಮೂವತ್ತು ಮಂದಿ ಶೂರರು** ಪ್ರಖ್ಯಾತರಾಗಿದ್ದ ಹಾಗೂ ಬಹಳ ಧೈರ್ಯಶಾಲಿಗಳಾಗಿದ್ದ ಈ ಸೈನಿಕರು ದಾವೀದನ ಗುಂಪಿನವರು.

ಮೂವತ್ತು ಮಂದಿ ಪರಾಕ್ರಮಿಗಳ ಗುಂಪಿನಲ್ಲಿ ಇತರ
ಜನರೆಂದರೆ: ಬೇತ್ಲೆಹೇಮಿನ ದೋದೋವಿನ ಮಗನಾದ
ಎಲ್ಹಾನಾನನು. 25ಹೆರೋದಿನ ಶಮ್ಮ, ಎಲೀಕ,
26ಪೆಲೆಟಿನವನಾದ ಹೆಲೆಚ್, ತೆಕೋವದ ಇಕ್ಕೇಷನ
ಮಗನಾದ ಈರಾ, 27ಅಣತೋತಿನವನಾದ ಅಬೀಯೆ
ಜೆರ್, ಹುಷಾದ ಮೆಬುನ್ನೈ 28ಅಹೋಹಿನವನಾದ
ಚಲ್ಮೋನ್, ನೆಟೋಫನಾದ ಮೆಹರೈ, 29ನೆಟೋಫದ
ಬಾಣನ ಮಗ ಹೇಲೆದ್, ಬೆನ್ಯಾಮೀನ್ ಕುಟುಂಬದ
ಗಿಬೆಯದ ರೀಬೈ ಮಗನಾದ ಇತ್ತೈ, 30ಪಿರಾತೋನ್ಯನಾದ
ಬೆನಾಯ, ಗಾಷ ಹಳ್ಳದ ಹಿದ್ದೈ, 31ಅರಾಬಾದ
ಅಬೀಅಲ್ಬೋನ್, ಬರ್ಹುಮ್ಯನಾದ ಅಜ್ಮಾವೇತ್,
32ಶಾಲ್ಬೋನ್ಯನಾದ ಎಲೆಯಬ್ಬಾ, ಯಾಷೇನನ ಗಂಡು
ಮಕ್ಕಳು, ಯೋನಾತಾನ, 33ಹರಾರ್ಯನಾದ ಶಮ್ಮ,
ಹರಾರ್ಯನಾದ ಶಾರಾರನ ಮಗ ಅಹೀಯಾಮ್,
34ಮಾಕಾದ ಅಹಸ್ಬೈನ ಮಗನಾದ ಎಲೀಫೆಲೆಟ್,
ಗಿಲೋವಿನ ಅಹೀತೋಫೆಲನ ಮಗ ಎಲೀಯಾಮ್,
35ಕರ್ಮೆಲ್ಯನಾದ ಹೆಚ್ರೋ, ಅರ್ಬೀಯನಾದ ಪಾರೈ,
36ಚೋಬದ ನಾತಾನನ ಮಗನಾದ ಇಗಾಲ್,
ಗಾದ್ಯನಾದ ಬಾನೀ, 37ಅಮ್ಮೋನಿಯನಾದ ಜೆಲೆಕ್,
ಚೆರೂಯಳ ಮಗನಾದ ಯೋವಾಬನ ಸಹಾಯಕನೂ
ಬೇರೋತ್ಯನೂ ಆದ ನಹರೈ, 38ಇತ್ರೀಯರಾದ ಈರಾ,
ಗಾರೇಬರು ಮತ್ತು 39ಹಿತ್ತಿಯನಾದ ಊರೀಯನು.
ಹೀಗೆ ಒಟ್ಟು ಮೂವತ್ತೇಳು ಜನರಿದ್ದರು.

### ಜನಗಣತಿ ಮತ್ತು ಅದರ ಫಲ

24 ಯೆಹೋವನು ಇಸ್ರೇಲರ ಮೇಲೆ ಮತ್ತೆ ಕೋಪ
ಗೊಂಡು ಇಸ್ರೇಲರ ವಿರುದ್ಧನಾಗುವಂತೆ
ದಾವೀದನನ್ನು ಪ್ರೇರೇಪಿಸಿದನು. ದಾವೀದನು,
‘‘ಇಸ್ರೇಲಿನ ಮತ್ತು ಯೆಹೂದದ ಜನಗಣತಿ ಮಾಡಿರಿ’’
ಎಂದು ಆಜ್ಞಾಪಿಸಿದನು.

2ರಾಜನಾದ ದಾವೀದನು ಸೈನ್ಯದ ಸೇನಾಧಿಪತಿಯಾದ
ಯೋವಾಬನಿಗೆ, ‘‘ದಾನ್‌ನಿಂದ ಬೇರ್ಷೆಬದವರೆಗಿನ
ಇಸ್ರೇಲಿನ ಎಲ್ಲಾ ಕುಲಗಳಲ್ಲಿ ಸಂಚರಿಸಿ ಜನರನ್ನು ಲೆಕ್ಕ
ಹಾಕಿರಿ. ಆಗ ಅಲ್ಲಿ ಎಷ್ಟು ಜನರಿದ್ದಾರೆಂಬುದು ನನಗೆ
ತಿಳಿಯುತ್ತದೆ’’ ಎಂದು ಹೇಳಿದನು.

3ಆದರೆ ಯೋವಾಬನು ರಾಜನಿಗೆ, ‘‘ಅಲ್ಲಿ ಎಷ್ಟು ಜನರಿ
ದ್ದಾರೆಂಬುದು ಅಗತ್ಯವಿಲ್ಲ. ನಿನ್ನ ದೇವರಾದ
ಯೆಹೋವನು ಈಗ ಇರುವುದಕ್ಕಿಂತ ನೂರರಷ್ಟು ಹೆಚ್ಚು
ಜನರನ್ನು ದಯಪಾಲಿಸಲಿ! ಈ ಕಾರ್ಯವು ಸಂಭವಿಸುವು
ದನ್ನು ನಿನ್ನ ಕಣ್ಣುಗಳಿಂದಲೇ ನೋಡು. ಆದರೆ ನೀನು
ಈ ಕಾರ್ಯವನ್ನು ಮಾಡಬೇಕೆಂದಿರುವುದೇಕೆ?’’ ಎಂದು
ಕೇಳಿದನು.

4ಆದರೆ ರಾಜನಾದ ದಾವೀದನು ಯೋವಾಬನಿಗೆ
ಮತ್ತು ಸೈನ್ಯದ ಸೇನಾಪತಿಗಳಿಗೆ ಜನರನ್ನು ಲೆಕ್ಕಹಾಕಲು
ಆಜ್ಞಾಪಿಸಿದನು. ಆದುದರಿಂದ ಯೋವಾಬನು ಸೈನ್ಯದ
ಸೇನಾಪತಿಗಳೊಡನೆ ಇಸ್ರೇಲಿನ ಜನರನ್ನು ಲೆಕ್ಕಹಾಕಲು
ಹೊರಟನು. 5ಅವರು ಜೋರ್ಡನ್ ನದಿಯನ್ನು ದಾಟಿ
ಅರೋಯೇರಿನಲ್ಲಿ ಪಾಳೆಯಮಾಡಿಕೊಂಡರು. ಅವರ
ಪಾಳೆಯವು ನಗರದ ಬಲ ಅಂಚಿನಲ್ಲಿತ್ತು. (ಆ ನಗರವು
ಗಾದ್ ಕಣಿವೆಯ ಮಧ್ಯಭಾಗದಲ್ಲಿಯೂ ಯಗ್ಜೇರಿನ
ಮಾರ್ಗದಲ್ಲಿಯೂ ಇತ್ತು.) 6ಆಗ ಅವರು ಗಿಲ್ಯಾದಿಗೆ
ಮತ್ತು ತಖ್ತೀಮ್‌ಹೊಜೀ ಪ್ರದೇಶಕ್ಕೂ ಯಾನಿನ
ದಾನಿಗೂ, ಚೀದೋನಿನ ಸುತ್ತಲೂ ಹೋದರು. 7ಅವರು
ತೂರ್ ಕೋಟೆಗೂ ಹಿವ್ವಿಯರ ಮತ್ತು ಕಾನಾನ್ಯರ ಎಲ್ಲಾ
ನಗರಗಳಿಗೂ ಯೆಹೂದದ ದಕ್ಷಿಣಕ್ಕಿರುವ ಬೇರ್ಷೆಬಕ್ಕೂ
ಹೋದರು. 8ಅವರು ದೇಶದಲ್ಲೆಲ್ಲಾ ಸಂಚರಿಸಿ ಒಂಭತ್ತು
ತಿಂಗಳು ಮತ್ತು ಇಪ್ಪತ್ತು ದಿನಗಳ ತರುವಾಯ ಜೆರುಸ
ಲೇಮಿಗೆ ಬಂದರು. 9ಯೋವಾಬನು ರಾಜನಿಗೆ ಜನರ
ಪಟ್ಟಿಯನ್ನು ಕೊಟ್ಟನು. ಇಸ್ರೇಲಿನಲ್ಲಿ ಕತ್ತಿಯನ್ನು
ಬಳಸಬಲ್ಲ ಎಂಟು ಲಕ್ಷ ಜನರಿದ್ದರು. ಯೆಹೂದದಲ್ಲಿ
ಐದು ಲಕ್ಷ ಜನರಿದ್ದರು.

### ಯೆಹೋವನು ದಾವೀದನನ್ನು ದಂಡಿಸಿದನು

10ದಾವೀದನು ಜನರನ್ನು ಲೆಕ್ಕಹಾಕಿದ ನಂತರ
ಅವಮಾನಗೊಂಡಂತೆ ಭಾವಿಸಿದನು. ದಾವೀದನು
ಯೆಹೋವನಿಗೆ, ‘‘ನಾನು ಈ ಕಾರ್ಯವನ್ನು ಮಾಡಿ
ಮಹಾಪಾಪಕ್ಕೆ ಒಳಗಾದೆನು! ಯೆಹೋವನೇ, ನನ್ನ ಪಾಪ
ಕ್ಕಾಗಿ ನನ್ನನ್ನು ಕ್ಷಮಿಸೆಂದು ಬೇಡುತ್ತೇನೆ. ನಾನು ಬಹಳ
ಮೂರ್ಖನಾಗಿ ಬಿಟ್ಟೆ’’ ಎಂದು ಹೇಳಿದನು.

11ದಾವೀದನು ಹೊತ್ತಾರೆಯಲ್ಲಿ ಎದ್ದಾಗ, ಅವನ ದರ್ಶಿ
ಯಾದ ಗಾದನಿಗೆ ಯೆಹೋವನ ಮಾತುಗಳು ಬಂದವು.
12ಯೆಹೋವನು ಅವನಿಗೆ, ‘‘ನೀನು ಹೋಗಿ, ದಾವೀದ
ನಿಗೆ ಹೀಗೆ ಹೇಳು, ‘‘ಯೆಹೋವನು ಹೀಗೆ ಹೇಳುತ್ತಾನೆ,
‘ನಾನು ಮೂರು ಶಿಕ್ಷೆಗಳನ್ನು ನಿನ್ನ ಮುಂದೆ ಇಡುತ್ತೇನೆ.
ಅವುಗಳಲ್ಲಿ ಒಂದನ್ನು ಆರಿಸಿಕೊ’’’ ಎಂದು ಹೇಳಿದನು.

13ಗಾದನು ದಾವೀದನ ಬಳಿಗೆ ಹೋಗಿ, ‘‘ಈ ಮೂರು
ಶಿಕ್ಷೆಗಳಲ್ಲಿ ಒಂದನ್ನು ಆರಿಸಿಕೊ.

ನಿನಗೆ ಮತ್ತು ನಿನ್ನ ದೇಶಕ್ಕೆ ಏಳು ವರ್ಷಗಳ ಕಾಲ
ಬರಗಾಲ ಬರಬೇಕೇ?

ಅಥವಾ ನಿನ್ನ ಶತ್ರುಗಳು ನಿನ್ನನ್ನು ಮೂರು ತಿಂಗಳ ಕಾಲ
ಅಟ್ಟಿಸಬೇಕೇ? ಅಥವಾ ಮೂರು ದಿನಗಳ ಕಾಲ ನಿನ್ನ
ದೇಶದಲ್ಲಿ ರೋಗರುಜಿನಗಳು ವ್ಯಾಪಿಸಬೇಕೇ?

ಇವುಗಳ ಬಗ್ಗೆ ಯೋಚಿಸು, ನನ್ನನ್ನು ಕಳುಹಿಸಿದ
ಯೆಹೋವನಿಗೆ ನಾನು ಏನು ಹೇಳಬೇಕೆಂಬುದನ್ನು
ನೀನು ತೀರ್ಮಾನಿಸು’’ ಎಂದು ಹೇಳಿದನು.

14ದಾವೀದನು ಗಾದನಿಗೆ, ‘‘ನಾನು ನಿಜವಾಗಿಯೂ
ತೊಂದರೆಗೆ ಒಳಗಾದೆ! ಆದರೆ ಯೆಹೋವನು ಬಹಳ
ದಯಾಮಯನು. ಆದ್ದರಿಂದ ಯೆಹೋವನು ನಮ್ಮನ್ನು
ದಂಡಿಸಲಿ; ಆದರೆ ಅದು ಜನರಿಂದ ಬಾರದಿರಲಿ’’ಎಂದು
ಹೇಳಿದನು.

15ಆದ್ದರಿಂದ ಯೆಹೋವನು ಇಸ್ರೇಲಿಗೆ ರೋಗರು
ಜಿನಗಳನ್ನು* ಉಂಟುಮಾಡಿದನು. ಇವು ಹೊತ್ತಾರೆ
ಯಿಂದ ಆರಂಭವಾಗಿ ನಿಯಮಿತಕಾಲದವರೆಗೆ ಮುಂದು
ವರಿದವು. ದಾನ್‌ನಿಂದ ಬೇರ್ಷೆಬದವರೆಗೆ ಎಪ್ಪತ್ತು
ಸಾವಿರ ಜನರು ಸತ್ತರು. 16ದೇವದೂತನು ಜೆರುಸಲೇ
ಮನ್ನು ನಾಶಗೊಳಿಸಲು ಅದರತ್ತ ತನ್ನ ಕೈಯನ್ನು ಚಾಚಿ
ದನು. ಆದರೆ ಸಂಭವಿಸಿದ ಕೆಟ್ಟಕಾರ್ಯಗಳ ಬಗ್ಗೆ
ಯೆಹೋವನು ಪಶ್ಚಾತ್ತಾಪಪಟ್ಟನು. ಯೆಹೋವನು ಜನ
ರನ್ನು ನಾಶಗೊಳಿಸಿದ ದೇವದೂತನಿಗೆ, ‘‘ಇಲ್ಲಿಗೆ ಸಾಕು!
ನಿನ್ನ ಕೈಯನ್ನು ಕೆಳಗಿಳಿಸು’’ ಎಂದು ಹೇಳಿದನು. ಆ
ಯೆಹೋವನ ದೂತನು ಯೆಬೂಸಿಯನಾದ ಅರೌನನ
ಕಣದಲ್ಲಿದ್ದನು.

### ದಾವೀದನು ಅರೌನನ ಕಣವನ್ನು ಕೊಂಡುಕೊಂಡನು

17ಜನರನ್ನು ಕೊಂದ ದೂತನನ್ನು ದಾವೀದನು ನೋಡಿ
ಯೆಹೋವನೊಂದಿಗೆ ಮಾತನಾಡಿದನು. ದಾವೀದನು
ಯೆಹೋವನಿಗೆ, ‘‘ನಾನು ಪಾಪ ಮಾಡಿದೆನು. ನಾನು ತಪ್ಪು
ಮಾಡಿದೆನು. ಆದರೆ ಈ ಜನರು ಕೇವಲ ಕುರಿಗಳಂತೆ
ನಿರಪರಾಧಿಗಳು. ಅವರು ಯಾವ ತಪ್ಪನ್ನೂ ಮಾಡಲಿಲ್ಲ.
ದಯಮಾಡಿ ನಿನ್ನ ದಂಡನೆಯು ನನಗೆ ಮತ್ತು ನನ್ನ
ತಂದೆಯ ಕುಲದ ವಿರುದ್ಧವಾಗಿರಲಿ’’ ಎಂದು ಹೇಳಿದನು.
18ಆ ದಿನ ಗಾದನು ದಾವೀದನ ಬಳಿಗೆ ಬಂದು,
‘‘ಹೋಗಿ, ಯೆಬೂಸಿಯನಾದ ಅರೌನನ ಕಣದಲ್ಲಿ
ಯೆಹೋವನಿಗಾಗಿ ಯಜ್ಞವೇದಿಕೆಯನ್ನು ನಿರ್ಮಿಸು’’
ಎಂದು ಹೇಳಿದನು. 19ಅಂತೆಯೇ ದಾವೀದನು
ಯೆಹೋವನ ಆಜ್ಞೆಗೆ ವಿಧೇಯನಾಗಿ ಅರೌನನನ್ನು
ನೋಡಲು ಹೋದನು. 20ರಾಜನು ಅವನ ಸೇವಕ
ರೊಂದಿಗೆ ತನ್ನ ಕಡೆ ಬರುತ್ತಿರುವುದನ್ನು ಅರೌನನು
ನೋಡಿದನು. ಅರೌನನು ಹೊರಗೆ ಬಂದು ಸಾಷ್ಟಾಂಗ
ನಮಸ್ಕಾರ ಮಾಡಿದನು. 21ಅರೌನನು, ‘‘ರಾಜನಾದ ನನ್ನ
ಒಡೆಯನೇ, ನನ್ನ ಬಳಿ ಬಂದದ್ದೇಕೆ?’’ ಎಂದು
ಕೇಳಿದನು.

ದಾವೀದನು, ‘‘ನಿನ್ನಿಂದ ಕಣವನ್ನು ಕೊಂಡುಕೊಳ್ಳುವು
ದಕ್ಕಾಗಿ ಬಂದೆನು. ನಾನು ಯೆಹೋವನಿಗೆ ಒಂದು ಯಜ್ಞ
ವೇದಿಕೆಯನ್ನು ನಿರ್ಮಿಸುತ್ತೇನೆ. ಆಗ ರೋಗರುಜಿನಗಳು
ನಿಲ್ಲುತ್ತವೆ’’ ಎಂದನು.

22ಅರೌನನು ದಾವೀದನಿಗೆ ‘‘ರಾಜನಾದ ನನ್ನ
ಒಡೆಯನೇ, ಯಜ್ಞವನ್ನು ಸಮರ್ಪಿಸಲು ನೀನು ಏನನ್ನು
ಬೇಕಾದರೂ ತೆಗೆದುಕೊ. ಸರ್ವಾಂಗಹೋಮವನ್ನು
ಅರ್ಪಿಸಲು ಇಲ್ಲಿ ಕೆಲವು ಹೋರಿಗಳಿವೆ, ನೊಗ
ಮುಂತಾದ ಮರದ ಸಲಕರಣೆಗಳಿವೆ. 23ರಾಜನೇ, ನಾನು
ಎಲ್ಲವನ್ನೂ ನಿನಗೆ ಅರ್ಪಿಸುತ್ತೇನೆ’’ ಎಂದು ಹೇಳಿದನು.
ಇದಲ್ಲದೆ ಅರೌನನು ರಾಜನಿಗೆ, ‘‘ನಿನ್ನ ದೇವರಾದ
ಯೆಹೋವನು ನಿನ್ನನ್ನು ಮೆಚ್ಚಿಕೊಳ್ಳಲಿ’’ ಎಂದೂ
ಹೇಳಿದನು.

24ಆದರೆ ರಾಜನು ಅರೌನನಿಗೆ, ‘‘ಇಲ್ಲ, ನಾನು ನಿನಗೆ
ಸತ್ಯವನ್ನು ಹೇಳುತ್ತಿದ್ದೇನೆ. ನಾನು ನಿನ್ನ ಭೂಮಿಗೆ
ಬೆಲೆಯನ್ನು ಕೊಟ್ಟು ಕೊಂಡುಕೊಳ್ಳುತ್ತೇನೆ. ಉಚಿತವಾಗಿ
ಸಿಕ್ಕಿದ್ದನ್ನು ನಾನು ನನ್ನ ದೇವರಾದ ಯೆಹೋವನಿಗೆ
ಸರ್ವಾಂಗ ಹೋಮವನ್ನಾಗಿ ಅರ್ಪಿಸುವುದಿಲ್ಲ’’ ಎಂದು
ಹೇಳಿದನು.

ಆದುದರಿಂದ ದಾವೀದನು ಕಣವನ್ನು ಮತ್ತು ಹೋರಿ
ಗಳನ್ನು ಐವತ್ತು ಶೆಕೆಲ್‌ಗಳಿಗೆ* ಕೊಂಡುಕೊಂಡನು.
25ನಂತರ ದಾವೀದನು ಅಲ್ಲಿ ಯೆಹೋವನಿಗಾಗಿ ಯಜ್ಞ
ವೇದಿಕೆಯನ್ನು ನಿರ್ಮಿಸಿದನು. ದಾವೀದನು ಸರ್ವಾಂಗ
ಹೋಮಗಳನ್ನು ಮತ್ತು ಸಮಾಧಾನ ಯಜ್ಞಗಳನ್ನು ಸಮ
ರ್ಪಿಸಿದನು. ಅವನು ದೇಶಕ್ಕಾಗಿ ಮಾಡಿದ ಪ್ರಾರ್ಥನೆಗೆ
ಯೆಹೋವನು ಉತ್ತರಕೊಟ್ಟನು. ಯೆಹೋವನು
ಇಸ್ರೇಲಿನ ರೋಗರುಜಿನಗಳನ್ನು ನಿಲ್ಲಿಸಿದನು.

---

**ರೋಗರುಜಿನ** ಅಕ್ಷರಶಃ ‘‘ಉಪದ್ರವ’’ ಅಥವಾ ‘‘ಅಂಟು ರೋಗ.’’

**ಶೆಕೆಲ್** ಇಸ್ರೇಲಿನ ನಾಣ್ಯ.

# 1 ರಾಜರುಗಳು

1 ಆ ಕಾಲದಲ್ಲಿ ರಾಜನಾದ ದಾವೀದನು ಬಹಳ
ಮುದುಕನಾಗಿದ್ದನು. ಅವನ ದೇಹವು ಬೆಚ್ಚಗಾಗು
ತ್ತಲೇ ಇರಲಿಲ್ಲ. ಅವನ ಸೇವಕರು ಅವನಿಗೆ ಕಂಬಳಿ
ಗಳನ್ನು ಹೊದಿಸಿದರೂ ಅವನ ದೇಹವು ತಣ್ಣಗೇ ಇರು
ತ್ತಿತ್ತು. [2]ಆದುದರಿಂದ ಅವನ ಸೇವಕರು ಅವನಿಗೆ, ‘‘ನಾವು
ನಿನ್ನ ಆರೈಕೆಗಾಗಿ ಒಬ್ಬ ಯುವಕನ್ನಿಕೆಯನ್ನು ಹುಡುಕು
ವೆವು. ಅವಳು ನಿನ್ನನ್ನು ಒತ್ತರಿಸಿಕೊಂಡು ಮಲಗಿ ಬೆಚ್ಚ
ಗಿಡುತ್ತಾಳೆ’’ ಎಂದು ಹೇಳಿದರು. [3]ಆದುದರಿಂದ ರಾಜನ
ಸೇವಕರು ಇಸ್ರೇಲಿನ ಎಲ್ಲ ಕಡೆಗಳಲ್ಲೂ ಯುವತಿಯೊಬ್ಬ
ಳನ್ನು ಹುಡುಕಲಾರಂಭಿಸಿದರು. ಅವರು ರಾಜನನ್ನು ಬೆಚ್ಚ
ಗಿಡಲು ಒಬ್ಬ ಸುಂದರ ಹುಡುಗಿಯನ್ನು ಹುಡುಕ
ಲಾರಂಭಿಸಿದರು. ಅವರಿಗೆ ಅಬೀಷಗ್ ಎಂಬ ಹೆಸರಿನ
ಯುವತಿಯು ಸಿಕ್ಕಿದಳು. ಅವಳು ಶೂನೇಮ್ ನಗರ
ದವಳು. ಅವರು ಆ ಯುವತಿಯನ್ನು ರಾಜನ ಬಳಿಗೆ
ಕರೆದುಕೊಂಡು ಬಂದರು. [4]ಆ ಯುವತಿಯು ಬಹಳ
ಸುಂದರಳಾಗಿದ್ದಳು. ಅವಳು ರಾಜನ ಆರೈಕೆಯನ್ನು
ಮಾಡಿದಳು ಮತ್ತು ಅವನ ಸೇವೆಯನ್ನೂ ಮಾಡಿದಳು.
ರಾಜನಾದ ದಾವೀದನು ಅವಳನ್ನು ಕೂಡಲಿಲ್ಲ.

[5]ರಾಜನಾದ ದಾವೀದನ ಮಗನಾದ ಅದೋನೀಯನು
ಬಹಳ ಗರ್ವಿಷ್ಠನಾದನು. ಅವನು, ‘‘ನಾನೇ ರಾಜನಾಗು
ತ್ತೇನೆ’’ ಎಂದು ಹೇಳಿಕೊಂಡನು. (ಅದೋನೀಯನ
ತಾಯಿಯ ಹೆಸರು ಹಗ್ಗೀತ.) ಅದೋನೀಯನು ರಾಜ
ನಾಗಬೇಕೆಂಬುದಾಗಿ ಬಹಳ ಆಸೆಪಟ್ಟನು. ಆದುದರಿಂದ
ಅವನು ತನಗಾಗಿ ಒಂದು ರಥವನ್ನು, ಕುದುರೆಗಳನ್ನು
ಮತ್ತು ರಥದ ಮುಂದೆ ಓಡುವಂತಹ ಐವತ್ತು ಜನರನ್ನು
ಪಡೆದನು. [6]ರಾಜನಾದ ದಾವೀದನು ತನ್ನ ಮಗನಾದ
ಅದೋನೀಯನನ್ನು ಎಂದೂ ತಿದ್ದಲಿಲ್ಲ. ದಾವೀದನು,
‘‘ನೀನು ಹೀಗೇಕೆ ಮಾಡುತ್ತಿರುವೆ?’’ ಎಂದು ಅವನನ್ನು
ಒಂದು ಸಾರಿಯಾದರೂ ಕೇಳಲಿಲ್ಲ. ಅದೋನೀಯನು
ಅಬ್ಷಾಲೋಮನ ಬಳಿಕ ಹುಟ್ಟಿದ ಮಗ. ಅದೋನೀ
ಯನು ಬಹಳ ಸುಂದರನಾಗಿದ್ದನು.

[7]ಅದೋನೀಯನು ಚೆರೂಯಳ ಮಗನಾದ
ಯೋವಾಬ ಮತ್ತು ಯಾಜಕನಾದ ಎಬ್ಯಾತಾರನೊಂದಿಗೆ
ಮಾತನಾಡಿದನು. ತಾನು ರಾಜನಾಗಬೇಕೆಂಬ ಅದೋ
ನೀಯನ ಯೋಜನೆಗೆ ಅವರು ಬೆಂಬಲ ನೀಡಿದರು.
[8]ಆದರೆ ಅದೋನೀಯನ ಕಾರ್ಯವನ್ನು ಒಪ್ಪದ ಅನೇ
ಕರು ದಾವೀದನಿಗೆ ನಂಬಿಗಸ್ತರಾಗಿದ್ದರು. ಇವರು
ಯಾರೆಂದರೆ: ಯಾಜಕನಾದ ಚಾದೋಕ, ಯೆಹೋಯಾ
ದಾವನ ಮಗನಾದ ಬೆನಾಯ, ಪ್ರವಾದಿಯಾದ ನಾತಾನ,
ಶಿಮ್ಮೀ, ರೇಗೀ ಮತ್ತು ರಾಜನಾದ ದಾವೀದನ ವಿಶೇಷ
ಅಂಗರಕ್ಷಕರು. ಇವರಲ್ಲಿ ಯಾರೂ ಅದೋನೀಯನ
ಸಂಗಡ ಸೇರಲಿಲ್ಲ.

[9]ಒಂದು ದಿನ, ಅದೋನೀಯನು ಎನ್ ರೋಗೆಲಿನ
ಹತ್ತಿರದ ಚೋಹೆಲೆತ್ ಎಂಬ ಬಂಡೆಯ ಬಳಿ ಕೆಲವು ಕುರಿ
ಗಳನ್ನು,ಹಸುಗಳನ್ನು ಮತ್ತು ಕೊಬ್ಬಿದ ಕರುಗಳನ್ನು
ಸಮಾಧಾನಯಜ್ಞವಾಗಿ ಅರ್ಪಿಸಿದನು. ಅದೋನೀ
ಯನು ತನ್ನ ಸಹೋದರರನ್ನು (ರಾಜನ ಇತರ ಗಂಡು
ಮಕ್ಕಳನ್ನು) ಮತ್ತು ಯೆಹೂದದ ಅಧಿಕಾರಿಗಳನ್ನು ಆಹ್ವಾ
ನಿಸಿದನು. [10]ಆದರೆ ಅದೋನೀಯನು ಪ್ರವಾದಿಯಾದ
ನಾತಾನನನ್ನಾಗಲೀ ಬೆನಾಯನನ್ನಾಗಲೀ ಅವನ
ತಂದೆಯ ವಿಶೇಷ ಅಂಗರಕ್ಷಕರನ್ನಾಗಲೀ ಅವನ
ಸೋದರ ಸೊಲೊಮೋನನನ್ನಾಗಲೀ ಆಹ್ವಾನಿಸಲಿಲ್ಲ.

[11]ನಾತಾನನಿಗೆ ಇದು ತಿಳಿದಾಗ, ಅವನು ಸೊಲೊ
ಮೋನನ ತಾಯಿಯಾದ ಬತ್ಷೆಬೆಳ ಬಳಿಗೆ ಹೋಗಿ,
‘‘ಹಗ್ಗೀತಳ ಮಗನಾದ ಅದೋನೀಯನು ಮಾಡುತ್ತಿರು
ವುದನ್ನು ನೀನು ಕೇಳಿದೆಯಾ? ಅವನು ತನ್ನನ್ನು ತಾನೇ
ರಾಜನನ್ನಾಗಿ ಮಾಡಿಕೊಂಡಿದ್ದಾನೆ ಮತ್ತು ನಮ್ಮ
ಒಡೆಯನಾದ ರಾಜ ದಾವೀದನಿಗೆ ಇದು ತಿಳಿದಿಲ್ಲ. [12]ನಿನ್ನ
ಜೀವ ಮತ್ತು ನಿನ್ನ ಮಗನಾದ ಸೊಲೊಮೋನನ ಜೀವ
ಅಪಾಯದಲ್ಲಿರುವಂತಿದೆ. ಆದರೆ ನೀನು ನಿನ್ನನ್ನು ಹೇಗೆ
ರಕ್ಷಿಸಿಕೊಳ್ಳಬೇಕೆಂಬುದನ್ನು ನಾನು ನಿನಗೆ ತಿಳಿಸುತ್ತೇನೆ.
[13]ರಾಜನಾದ ದಾವೀದನ ಬಳಿಗೆ ಹೋಗಿ ಅವನಿಗೆ,
‘ನನ್ನ ಒಡೆಯನಾದ ರಾಜನೇ, ನನ್ನ ಮಗನಾದ
ಸೊಲೊಮೋನನು ನಿನ್ನ ನಂತರದ ರಾಜನೆಂದು ನೀನು
ನನಗೆ ವಾಗ್ದಾನ ಮಾಡಿದ್ದೆ. ಹೀಗಿರುವಾಗ ಅದೋನೀ
ಯನು ನೂತನ ರಾಜನಾದದ್ದು ಏಕೆ?’ ಎಂದು ಹೇಳು.

14ನೀನು ಅವನೊಂದಿಗೆ ಮಾತನಾಡುತ್ತಿರುವಾಗ ನಾನು
ಒಳಗೆ ಬಂದು ಅದೋನೀಯನ ಬಗ್ಗೆ ನೀನು ಹೇಳಿದ್ದೆ
ಲ್ಲವೂ ನಿಜ ಎಂದು ಹೇಳುತ್ತೇನೆ'' ಎಂಬುದಾಗಿ
ತಿಳಿಸಿದನು.

15ಆದುದರಿಂದ ಬತ್ಷೆಬೆಳು ರಾಜನನ್ನು ನೋಡಲು
ಅವನ ಮಲಗುವ ಕೊಠಡಿಗೆ ಹೋದಳು. ರಾಜನು ಬಹಳ
ವೃದ್ಧನಾಗಿದ್ದನು. ಶೂನೇಮಿನ ಹುಡುಗಿಯಾದ ಅಬೀಷ
ಗಳು ಅಲ್ಲಿ ಅವನ ಆರೈಕೆಯನ್ನು ಮಾಡುತ್ತಿದ್ದಳು.
16ರಾಜನ ಎದುರಿನಲ್ಲಿ ಬತ್ಷೆಬೆಳು ಬಾಗಿ ನಮಸ್ಕರಿಸಿದಳು.
ರಾಜನು ''ನಾನು ನಿನಗಾಗಿ ಏನಾದರು ಮಾಡ
ಬಹುದೇ?'' ಎಂದು ಕೇಳಿದನು.

17ಬತ್ಷೆಬೆಳು ''ನನ್ನ ಒಡೆಯನೇ, ನಿನ್ನ ದೇವರಾದ
ಯೆಹೋವನ ಆಣೆಯಾಗಿ ನೀನು ನನಗೆ ಒಂದು ವಾಗ್ದಾನ
ವನ್ನು ಮಾಡಿದ್ದೆ. 'ನನ್ನ ನಂತರ ನಿನ್ನ ಮಗ ಸೊಲೊ
ಮೋನನು ರಾಜನಾಗುವನು. ಸೊಲೊಮೋನನು ನನ್ನ
ಸಿಂಹಾಸನದ ಮೇಲೆ ಕುಳಿತು ಆಳುವನು' ಎಂಬುದೇ ಆ
ಪ್ರಮಾಣ. 18ಆದರೆ ಈಗ ಅದೋನೀಯನು ತನ್ನನ್ನು
ರಾಜನಾಗಿ ಮಾಡಿಕೊಳ್ಳುತ್ತಿದ್ದಾನೆ. ಇದು ನಿನಗೆ ತಿಳಿದಿಲ್ಲ.
19ಅದೋನೀಯನು ಅನೇಕ ಹಸುಗಳನ್ನು, ಕೊಬ್ಬಿದ
ಕರುಗಳನ್ನು ಮತ್ತು ಕುರಿಗಳನ್ನು ಸಮಾಧಾನಯಜ್ಞವಾಗಿ
ಅರ್ಪಿಸಿದ್ದಾನೆ. ಅವನು ನಿನ್ನ ಎಲ್ಲಾ ಗಂಡುಮಕ್ಕಳನ್ನು
ಆಹ್ವಾನಿಸಿದ್ದನು. ಅವನು ಯಾಜಕನಾದ ಎಬ್ಯಾತಾರನನ್ನು
ಮತ್ತು ನಿನ್ನ ಸೇನಾಧಿಪತಿಯಾದ ಯೋವಾಬನನ್ನು
ಆಹ್ವಾನಿಸಿದ್ದನು. ಆದರೆ ಅವನು ನಿನ್ನ ಸೇವೆಮಾಡುವ ನಿನ್ನ
ಮಗನಾದ ಸೊಲೊಮೋನನನ್ನು ಆಹ್ವಾನಿಸಲಿಲ್ಲ. 20ನನ್ನ
ಒಡೆಯನಾದ ರಾಜನೇ, ನಿನ್ನ ನಂತರ ಯಾರು ರಾಜ
ನಾಗಬೇಕೆಂಬ ನಿನ್ನ ತೀರ್ಮಾನಕ್ಕಾಗಿ ಇಸ್ರೇಲರೆಲ್ಲರೂ
ಕಾಯುತ್ತಿದ್ದಾರೆ. 21ನೀನು ಪೂರ್ವಿಕರ ಬಳಿಗೆ ಸೇರಿದ
ಮೇಲೆ ಸೊಲೊಮೋನನನ್ನು ಮತ್ತು ನನ್ನನ್ನು ಅಪ
ರಾಧಿಗಳೆಂದು ಜನರೆಲ್ಲರೂ ಹೇಳುವರು'' ಎಂದು
ಹೇಳಿದಳು.

22ರಾಜನೊಡನೆ ಬತ್ಷೆಬೆಳು ಮಾತಾಡುತ್ತಿರುವಷ್ಟರಲ್ಲಿ
ಪ್ರವಾದಿಯಾದ ನಾತಾನನು ಅವನನ್ನು ನೋಡಲು
ಬಂದನು. 23ಸೇವಕರು ರಾಜನಿಗೆ, ''ಪ್ರವಾದಿಯಾದ
ನಾತಾನನು ಬಂದಿರುವನು'' ಎಂದು ಹೇಳಿದರು. ಆಗ
ನಾತಾನನು ಪ್ರವೇಶಿಸಿ, ರಾಜನಿಗೆ ಸಾಷ್ಟಾಂಗ ನಮಸ್ಕಾರ
ಮಾಡಿದನು.

24ಆಗ ನಾತಾನನು ''ನನ್ನ ರಾಜನೇ, ನನ್ನ ಒಡೆಯನೇ,
ನಿನ್ನ ನಂತರ ಅದೋನೀಯನು ನೂತನ ರಾಜನಾಗಿ
ಜನರನ್ನು ಆಳಲೆಂದು ನೀನು ತೀರ್ಮಾನಿಸಿ ಪ್ರಕಟಿಸಿರು
ವೆಯಾ? 25ಈ ದಿನ ಅವನು ಅನೇಕ ಹೋರಿಗಳನ್ನು
ಮತ್ತು ಕುರಿಗಳನ್ನು ಸಮಾಧಾನ ಯಜ್ಞವಾಗಿ
ಅರ್ಪಿಸಿದನು. ಅವನು ನಿನ್ನ ಇತರ ಗಂಡು
ಮಕ್ಕಳನ್ನು, ಸೇನಾಧಿಪತಿಗಳನ್ನು ಮತ್ತು ಯಾಜಕನಾದ
ಎಬ್ಯಾತಾರನನ್ನು ಆಹ್ವಾನಿಸಿದ್ದನು. ಅವರು ಈಗ ಅವ
ನೊಡನೆ ತಿನ್ನುತ್ತಾ ಕುಡಿಯುತ್ತಾ ಇದ್ದಾರೆ. 'ರಾಜನಾದ
ಅದೋನೀಯನು ಚಿರಾಯುವಾಗಿರಲಿ' ಎಂದು ಅವರು
ಹೇಳುತ್ತಿದ್ದಾರೆ. 26ಆದರೆ ಅವನು ನನ್ನನ್ನಾಗಲೀ ಯಾಜಕ
ನಾದ ಚಾದೋಕನನ್ನಾಗಲೀ ಯೆಹೋಯಾದಾವನ
ಮಗನಾದ ಬೆನಾಯನನ್ನಾಗಲೀ ನಿನ್ನ ಮಗನಾದ
ಸೊಲೊಮೋನನನ್ನಾಗಲೀ ಆಹ್ವಾನಿಸಲಿಲ್ಲ. 27ನನ್ನ
ಒಡೆಯನಾದ ರಾಜನೇ, ನಮಗೆ ಹೇಳದೆ ಇದನ್ನು
ಮಾಡಿದೆಯಾ? ದಯವಿಟ್ಟು ಹೇಳು, ನಿನ್ನ ನಂತರ
ರಾಜನಾಗುವವನು ಯಾರು?'' ಎಂದು ಕೇಳಿದನು.

28ಆಗ ರಾಜನಾದ ದಾವೀದನು, ''ಒಳಗೆ ಬರಲು
ಬತ್ಷೆಬೆಳಿಗೆ ಹೇಳಿ!'' ಎಂದು ಹೇಳಿದನು. ಬತ್ಷೆಬೆಳು
ರಾಜನ ಎದುರಿಗೆ ಬಂದಳು.

29ಆಗ ರಾಜನು ಈ ಪ್ರಮಾಣವನ್ನು ಮಾಡಿದನು:
''ದೇವರಾದ ಯೆಹೋವನು ನನ್ನನ್ನು ಎಲ್ಲಾ ತೊಂದರೆ
ಗಳಿಂದ ರಕ್ಷಿಸಿದನು. ದೇವರಾಣೆಯಾಗಿಯೂ ನಾನು
ನಿನಗೆ ಈ ಪ್ರಮಾಣವನ್ನು ಮಾಡುತ್ತೇನೆ. 30ಅಂದು ನಾನು
ನಿನಗೆ ಮಾಡಿದ ಪ್ರಮಾಣವನ್ನು ಇಂದು ಪೂರೈಸುತ್ತೇನೆ.
ಇಸ್ರೇಲಿನ ದೇವರಾದ ಯೆಹೋವನ ಹೆಸರಿನಲ್ಲಿ ನಾನು
ನಿನಗೆ ಆ ಪ್ರಮಾಣವನ್ನು ಮಾಡಿದ್ದೆನು. ನನ್ನ ನಂತರ ನಿನ್ನ
ಮಗ ಸೊಲೊಮೋನನು ರಾಜನಾಗುವನೆಂದೂ ನನ್ನ
ಸಿಂಹಾಸನದ ಮೇಲೆ ಕುಳಿತುಕೊಳ್ಳುವನೆಂದೂ ನಾನು
ನಿನಗೆ ಪ್ರಮಾಣ ಮಾಡಿದ್ದೆನು. ನಾನು ನನ್ನ ವಾಗ್ದಾನವನ್ನು
ಈಡೇರಿಸುತ್ತೇನೆ'' ಎಂದು ಹೇಳಿದನು.

31ಆಗ ಬತ್ಷೆಬೆಳು ರಾಜನಿಗೆ ಸಾಷ್ಟಾಂಗ ನಮಸ್ಕಾರ
ಮಾಡಿದಳು. ಅವಳು, ''ರಾಜನಾದ ದಾವೀದನು
ಚಿರಾಯುವಾಗಿರಲಿ!'' ಎಂದು ಹೇಳಿದಳು.

### ಸೊಲೊಮೋನನು ಹೊಸ ರಾಜನಾಗಿ ಆರಿಸಲ್ಪಟ್ಟದ್ದು

32ಆಗ ರಾಜನಾದ ದಾವೀದನು, ''ಯಾಜಕನಾದ
ಚಾದೋಕನಿಗೆ, ಪ್ರವಾದಿಯಾದ ನಾತಾನನಿಗೆ ಮತ್ತು
ಯೆಹೋಯಾದಾವನ ಮಗನಾದ ಬೆನಾಯನಿಗೆ ಇಲ್ಲಿಗೆ
ಬರಲು ಹೇಳು'' ಎಂದು ಹೇಳಿದನು. ಈ ಮೂವರು
ರಾಜನ ಬಳಿಗೆ ಬಂದರು. 33ಆಗ ರಾಜನು ಅವರಿಗೆ, ''ನನ್ನ
ಸೇವಕರನ್ನು ಕರೆದುಕೊಂಡು ನನ್ನ ಮಗನಾದ
ಸೊಲೊಮೋನನನ್ನು ನನ್ನ ಸ್ವಂತ ಹೇಸರಕತ್ತೆಯ ಮೇಲೆ
ಕುಳ್ಳಿರಿಸಿಕೊಂಡು ಗೀಹೋನ್ ಬುಗ್ಗೆಗೆ ಹೋಗಿರಿ.
34ಅಲ್ಲಿ ಯಾಜಕನಾದ ಚಾದೋಕನು ಮತ್ತು ಪ್ರವಾದಿ
ಯಾದ ನಾತಾನನು ಅವನನ್ನು ಇಸ್ರೇಲಿನ ನೂತನ
ರಾಜನನ್ನಾಗಿ ಅಭಿಷೇಕಿಸಲಿ. ಅನಂತರ ತುತ್ತೂರಿಯನ್ನು

ಊದಿರಿ; ಎಲ್ಲರೂ ‘ರಾಜನಾದ ಸೊಲೊಮೋನನು
ಚಿರಂಜೀವಿಯಾಗಿರಲಿ’ ಎಂದು ಆರ್ಭಟಿಸಲಿ. 35ನಂತರ
ಅವನೊಂದಿಗೆ ಹಿಂದಿರುಗಿ ಇಲ್ಲಿಗೆ ಬನ್ನಿ. ಸೊಲೊಮೋ
ನನು ನನ್ನ ಸಿಂಹಾಸನದ ಮೇಲೆ ಕುಳಿತುಕೊಂಡು ಹೊಸ
ರಾಜನಾಗಿ ರಾಜ್ಯಾಭಾರ ಮಾಡಲಿ. ನಾನು ಸೊಲೊ
ಮೋನನನ್ನು ಇಸ್ರೇಲಿನ ಮತ್ತು ಯೆಹೂದದ ರಾಜನ
ನ್ನಾಗಿ ಆರಿಸಿದ್ದೇನೆ’’ ಎಂದು ಹೇಳಿದನು.

36ಯೆಹೋಯಾದಾವನ ಮಗನಾದ ಬೆನಾಯನು,
‘‘ಆಮೆನ್, ನಿನ್ನ ದೇವರಾದ ಯೆಹೋವನು ಇದನ್ನು
ಕಾರ್ಯಗತಗೊಳಿಸಲಿ. 37ನನ್ನ ಒಡೆಯನಾದ ರಾಜನೇ
ನಿನಗೆ ಯಾವಾಗಲೂ ಸಹಾಯಮಾಡಿದ. ಯೆಹೋವನು
ಸೊಲೊಮೋನನಿಗೂ ಸಹಾಯ ಮಾಡಲಿ. ನಿನ್ನ
ರಾಜ್ಯಕ್ಕಿಂತಲೂ ಸೊಲೊಮೋನನ ರಾಜ್ಯವು ಹೆಚ್ಚು
ಬಲಿಷ್ಠವಾಗಲಿ.’’ ಎಂದು ಉತ್ತರಿಸಿದನು.

38ಚಾದೋಕನು, ನಾತಾನನು, ಬೆನಾಯನು ಮತ್ತು
ರಾಜನ ಅಧಿಕಾರಿಗಳು ರಾಜನಾದ ದಾವೀದನಿಗೆ
ವಿಧೇಯರಾದರು. ಅವರು ಸೊಲೊಮೋನನನ್ನು ರಾಜ
ನಾದ ದಾವೀದನ ಹೇಸರಕತ್ತೆಯ ಮೇಲೆ ಕುಳ್ಳಿರಿಸಿ, ಅವ
ನೊಂದಿಗೆ ಗೀಹೋನಿಗೆ ಹೋದರು. 39ಯಾಜಕನಾದ
ಚಾದೋಕನು ಪವಿತ್ರಗುಡಾರದಿಂದ ಎಣ್ಣೆಯನ್ನು ತೆಗೆದು
ಕೊಂಡು ಬಂದನು. ಸೊಲೊಮೋನನು ರಾಜನೆಂದು
ತೋರಿಸಲು ಅವನ ತಲೆಯ ಮೇಲೆ ಚಾದೋಕನು ಎಣ್ಣೆ
ಯನ್ನು ಸುರಿದನು. ದಾವೀದನ ಜನರು ತುತ್ತೂರಿಯನ್ನು
ಊದಿದರು. ಆಗ ಎಲ್ಲಾ ಜನರೂ ‘‘ರಾಜನಾದ
ಸೊಲೊಮೋನನು ಚಿರಂಜೀವಿಯಾಗಿರಲಿ’’ ಎಂದು
ಆರ್ಭಟಿಸಿದರು. 40ಜನರೆಲ್ಲರೂ ಸೊಲೊಮೋನನನ್ನು
ಹಿಂಬಾಲಿಸುತ್ತಾ ನಗರಕ್ಕೆ ಬಂದರು. ಅವರು ಕೊಳಲು
ಗಳನ್ನು ಊದುತ್ತಾ ಸಂತಸದಿಂದ ಕೂಗಾಡುತ್ತಾ
ಬಂದರು. ಅವರು ಮಾಡಿದ ಶಬ್ದವು ಭೂಮಿಯನ್ನೇ
ನಡುಗಿಸುವಂತಿತ್ತು.

41ಆ ಸಮಯಕ್ಕೆ ಅದೋನೀಯನು ಮತ್ತು ಅವ
ನೊಂದಿಗಿದ್ದ ಅತಿಥಿಗಳು ಊಟವನ್ನು ಮುಗಿಸುತ್ತಿದ್ದರು.
ಅವರಿಗೆ ತುತ್ತೂರಿಯ ಶಬ್ದವು ಕೇಳಿಸಿತು.
ಯೋವಾಬನು, ‘‘ಆ ಶಬ್ದವು ಏನು? ನಗರದಲ್ಲಿ ಏನು
ನಡೆಯುತ್ತಿದೆ?’’ ಎಂದು ಕೇಳಿದನು.

42ಯೋವಾಬನು ಮಾತನಾಡುತ್ತಿದ್ದಂತೆ, ಯಾಜಕ
ನಾದ ಎಬ್ಯಾತಾರನ ಮಗನಾದ ಯೋನಾತಾನನು ಅಲ್ಲಿಗೆ
ಬಂದನು. ಅದೋನೀಯನು, ‘‘ಇಲ್ಲಿಗೆ ಬಾ! ನೀನು ಒಬ್ಬ
ಒಳ್ಳೆಯ ಮನುಷ್ಯ. ಆದುದರಿಂದ ನೀನು ನನಗೆ ಶುಭ
ಸಮಾಚಾರವನ್ನೇ ತಂದಿರುವೆ’’ ಎಂದು ಹೇಳಿದನು.

43ಆದರೆ ಯೋನಾತಾನನು, ‘‘ಇಲ್ಲ! ಇದು ನಿನಗೆ ಶುಭ
ಸಮಾಚಾರವಲ್ಲ! ನಮ್ಮ ರಾಜನಾದ ದಾವೀದನನು
ಸೊಲೊಮೋನನನ್ನು ನೂತನ ರಾಜನನ್ನಾಗಿ ಮಾಡಿ
ದನು. 44ರಾಜನಾದ ದಾವೀದನು ಯಾಜಕನಾದ
ಚಾದೋಕನನ್ನು, ಪ್ರವಾದಿಯಾದ ನಾತಾನನನ್ನು,
ಯೆಹೋಯಾದಾವನ ಮಗನಾದ ಬೆನಾಯನನ್ನು ಮತ್ತು
ರಾಜನ ಎಲ್ಲಾ ಅಧಿಕಾರಿಗಳನ್ನು ಅವನೊಂದಿಗೆ ಕಳುಹಿ
ಸಿದನು. ಅವರು ಸೊಲೊಮೋನನನ್ನು ರಾಜನ ಸ್ವಂತ
ಹೇಸರಕತ್ತೆಯ ಮೇಲೆ ಕುಳ್ಳಿರಿಸಿದರು. 45ನಂತರ
ಯಾಜಕನಾದ ಚಾದೋಕನು ಮತ್ತು ಪ್ರವಾದಿಯಾದ
ನಾತಾನನು ಗೀಹೋನ್ ಬುಗ್ಗೆಯ ಹತ್ತಿರ
ಸೊಲೊಮೋನನನ್ನು ಅಭಿಷೇಕಿಸಿದರು. ಅನಂತರ
ಅವರು ನಗರಕ್ಕೆ ಹೋದರು. ಅವರನ್ನು ಜನರು ಹಿಂಬಾಲಿ
ಸಿದರು. ಈಗ ನಗರದ ಜನರು ತುಂಬಾ ಸಂತೋಷದಿಂದ
ಇದ್ದಾರೆ. ಆ ಶಬ್ದವನ್ನೇ ನೀವು ಕೇಳುತ್ತಿರುವುದು.
46-47ಸೊಲೊಮೋನನು ಈಗ ರಾಜನ ಸಿಂಹಾಸನದ
ಮೇಲೆ ಕುಳಿತಿದ್ದಾನೆ. ರಾಜನಾದ ದಾವೀದನು ಒಳ್ಳೆಯ
ಕಾರ್ಯ ಮಾಡಿದನೆಂದು ಹೇಳಲು ರಾಜನ ಸೇವಕ
ರೆಲ್ಲರೂ ಬಂದಿದ್ದಾರೆ. ‘ನಿನ್ನ ದೇವರು ಸೊಲೊಮೋ
ನನನ್ನು ನಿನಗಿಂತಲೂ ಪ್ರಖ್ಯಾತನನ್ನಾಗಿ ಮಾಡಲಿ.
ದೇವರು ಸೊಲೊಮೋನನ ರಾಜ್ಯವನ್ನು ನಿನ್ನ ರಾಜ್ಯ
ಕ್ಕಿಂತಲೂ ಹೆಚ್ಚು ಬಲಿಷ್ಠಗೊಳಿಸಲಿ. ಅವನು ನಿನ
ಗಿಂತಲೂ ಉತ್ತಮನಾಗಲಿ!’ ಎಂದು ಅವರು
ಹೇಳುತ್ತಿದ್ದಾರೆ.’’

ರಾಜನಾದ ದಾವೀದನೂ ಅಲ್ಲಿದ್ದನು. ಅವನು ತನ್ನ
ಹಾಸಿಗೆಯಲ್ಲಿ ತಲೆಬಾಗಿಸಿ ಕೊಂಡು, 48‘ನಾನು ಕಣ್ಣಾರೆ
ಕಾಣುವಂತೆ ನನ್ನ ಮಕ್ಕಳಲ್ಲಿ ಒಬ್ಬನನ್ನು ಇಂದು ಸಿಂಹಾಸ
ನದ ಮೇಲೆ ಕುಳ್ಳಿರಿಸಿ, ಇಸ್ರೇಲಿನ ದೇವರಾದ
ಯೆಹೋವನಿಗೆ ಸ್ತೋತ್ರವಾಗಲಿ’ ಎಂದು ಹೇಳಿದ್ದಾನೆ
ಎಂದನು. 49ಆಗ ಅದೋನೀಯನ ಅತಿಥಿಗಳೆಲ್ಲರೂ
ಭಯಗೊಂಡು ಓಡಿಹೋದರು. 50ಅದೋನೀಯನೂ
ಹೆದರಿಕೊಂಡು ಯಜ್ಞವೇದಿಕೆಯ ಬಳಿಗೆ ಹೋಗಿ, ಯಜ್ಞ
ವೇದಿಕೆಯ ಕೊಂಬುಗಳನ್ನು ಹಿಡಿದುಕೊಂಡನು.*
51ಆಗ ಯಾರೋ ಒಬ್ಬರು ಸೊಲೊಮೋನನಿಗೆ,
‘‘ಅದೋನೀಯನು ನಿನಗೆ ಬಹಳವಾಗಿ ಹೆದರಿಕೊಂಡು
ಪವಿತ್ರಗುಡಾರದ ಯಜ್ಞವೇದಿಕೆಯ ಬಳಿಗೆ ಹೋಗಿ
ಯಜ್ಞವೇದಿಕೆಯ ಕೊಂಬುಗಳನ್ನು ಬಿಡದೆ ಹಿಡಿದು
ಕೊಂಡೇ ಇದ್ದಾನೆ, ‘ನನ್ನನ್ನು ಕೊಲ್ಲುವುದಿಲ್ಲವೆಂದು
ಪ್ರಮಾಣಮಾಡುವಂತೆ ರಾಜನಾದ ಸೊಲೊಮೋನನಿಗೆ
ತಿಳಿಸಿ’ ಎಂಬುದಾಗಿ ಅದೋನೀಯನು ಕೇಳಿ

---

**ಯಜ್ಞವೇದಿಕೆಯ ಕೊಂಬುಗಳನ್ನು ಹಿಡಿದುಕೊಂಡನು** ಇದು ಅವನು ಕರುಣೆಯನ್ನು ಕೇಳುವಂತೆ ಸೂಚಿಸುತ್ತದೆ. ಒಬ್ಬ ವ್ಯಕ್ತಿಯು ತನ್ನ ಅಪರಾಧದ ಬಗ್ಗೆ ಮುಗ್ಧನಾಗಿದ್ದರೆ, ಅವನು ಪವಿತ್ರವಾದ ಸ್ಥಳಕ್ಕೆ ಓಡಿಹೋದರೆ, ಅವನು ಯಜ್ಞವೇದಿಕೆಯ ಮೂಲೆಗಳನ್ನು ಹಿಡಿದುಕೊಂಡರೆ, ಆಗ ಅವನನ್ನು ದಂಡಿಸಬಾರದು.

ಕೊಳ್ಳುತ್ತಿದ್ದಾನೆ'' ಎಂದು ಹೇಳಿದನು. 52ಆದುದರಿಂದ
ಸೊಲೊಮೋನನು, ''ಅದೋನೀಯನು ತಾನು ಒಳ್ಳೆಯ
ಮನುಷ್ಯನೆಂದು ನಿರೂಪಿಸಿದರೆ ಅವನ ತಲೆಯ ಒಂದು
ಕೂದಲಿಗೂ ತೊಂದರೆಯಾಗುವುದಿಲ್ಲವೆಂದು ನಾನು
ಪ್ರಮಾಣ ಮಾಡುತ್ತೇನೆ. ಆದರೆ ಅವನೇನಾದರೂ
ಕೇಡನ್ನು ಮಾಡಿದರೆ ಸಾಯುವನು'' ಎಂದು ಹೇಳಿದನು.
53ರಾಜನಾದ ಸೊಲೊಮೋನನು ಅದೋನೀಯನನ್ನು
ಕರೆತರಲು ಕೆಲವು ಜನರನ್ನು ಕಳುಹಿಸಿದನು. ಅವರು
ಅದೋನೀಯನನ್ನು ರಾಜನಾದ ಸೊಲೊಮೋನನ
ಬಳಿಗೆ ಕರೆದುತಂದರು. ಅದೋನೀಯನು ರಾಜನಾದ
ಸೊಲೊಮೋನನ ಬಳಿಗೆ ಬಂದು, ಸಾಷ್ಟಾಂಗ ನಮಸ್ಕಾರ
ಮಾಡಿದನು. ಸೊಲೊಮೋನನು, ''ಮನೆಗೆ ಹೋಗು''
ಎಂದನು.

### ದಾವೀದ ರಾಜನ ಮರಣ

2 ದಾವೀದನು ಸಾಯುವ ಕಾಲವು ಹತ್ತಿರವಾಯಿತು.
ಆದುದರಿಂದ ದಾವೀದನು ಸೊಲೊಮೋನ
ನೊಂದಿಗೆ ಮಾತನಾಡುತ್ತಾ, ಅವನಿಗೆ, 2''ಎಲ್ಲರಂತೆ
ನನಗೂ ಸಾಯುವ ಕಾಲ ಸಮೀಪಿಸಿತು. ನೀನಾದರೊ
ಬಲಿಷ್ಠನಾಗಿರು; ಧೈರ್ಯವಂತನಾಗಿರು. 3ನಿನ್ನ ದೇವ
ರಾದ ಯೆಹೋವನ ಆಜ್ಞೆಗಳನ್ನೆಲ್ಲಾ ಎಚ್ಚರಿಕೆಯಿಂದ
ಅನುಸರಿಸು. ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದಿರುವ
ಆಜ್ಞೆಗಳಿಗೂ ಕಟ್ಟಳೆಗಳಿಗೂ ನಿರ್ಣಯಗಳಿಗೂ ಒಡಂಬ
ಡಿಕೆಗಳಿಗೂ ವಿಧೇಯನಾಗಿರು. ಆಗ ನೀನು ನಿನ್ನ ಎಲ್ಲ
ಕೆಲಸಕಾರ್ಯಗಳಲ್ಲೂ ನೀನು ಹೋಗುವ ಎಲ್ಲಾ ಕಡೆ
ಗಳಲ್ಲೂ ಯಶಸ್ಸನ್ನು ಗಳಿಸುವೆ. 4ನೀನು ಯೆಹೋವನಿಗೆ
ವಿಧೇಯನಾದರೆ, ಆಗ ಯೆಹೋವನು ನನಗೆ ಮಾಡಿದ
ವಾಗ್ದಾನವನ್ನು ಈಡೇರಿಸುವನು. ಯೆಹೋವನು ನನಗೆ
ಈ ರೀತಿ ವಾಗ್ದಾನ ಮಾಡಿರುವನು: 'ನಿನ್ನ ಮಕ್ಕಳು ನಂಬಿ
ಗಸ್ತರಾಗಿ ಪೂರ್ಣಮನಸ್ಸಿನಿಂದಲೂ ಪೂರ್ಣ ಪ್ರಾಣ
ದಿಂದಲೂ ನನ್ನ ಆಜ್ಞೆಗಳಿಗೆ ವಿಧೇಯರಾಗಿ ಜೀವಿಸುವು
ದಾಗಿದ್ದರೆ, ನಿನ್ನ ವಂಶದವರಲ್ಲಿ ಒಬ್ಬನು ಯಾವಾಗಲೂ
ಇಸ್ರೇಲಿನ ಜನರನ್ನು ಆಳುವವನಾಗಿರುತ್ತಾನೆ.'''
5''ಚೆರೂಯಳ ಮಗನಾದ ಯೋವಾಬನು ನನಗೆ
ಮಾಡಿದ್ದನ್ನು ಸಹ ನೀನು ಜ್ಞಾಪಿಸಿಕೊ. ಇಸ್ರೇಲಿನ ಇಬ್ಬರು
ಸೇನಾಧಿಪತಿಗಳನ್ನು ಅವನು ಕೊಂದುಹಾಕಿದನು. ಅವರು
ಯಾರೆಂದರೆ: ನೇರನ ಮಗನಾದ ಅಬ್ನೇರನು ಮತ್ತು
ಯೆತೆರನ ಮಗನಾದ ಅಮಾಸನು. ಈ ಜನರ ರಕ್ತವು
ಅವನ ಸೊಂಟಪಟ್ಟಿಯ ಕತ್ತಿ ಹಾಗೂ ಯುದ್ಧಕಾಲದಲ್ಲಿ
ತೊಡುವ ಪಾದರಕ್ಷೆಗಳ ಮೇಲೆ ಚಿಮ್ಮಿತು. ಶಾಂತಿಯ
ಕಾಲದಲ್ಲಿ ಅವನು ಅವರನ್ನು ಕೊಂದುಹಾಕಿದನು.
ಆದುದರಿಂದ ನಾನು ಅವನನ್ನು ದಂಡಿಸಬೇಕಾಗಿತ್ತು.
6ಆದರೆ ಈಗ ನೀನು ರಾಜನಾಗಿರುವೆ. ಆದುದರಿಂದ ನಿನ್ನ
ಜ್ಞಾನಕ್ಕೆ ಸರಿತೋಚಿದ ರೀತಿಯಲ್ಲಿ ನೀನು ಅವನನ್ನು
ದಂಡಿಸು. ಆದರೆ ನೀನು ಅವನನ್ನು ಖಂಡಿತವಾಗಿ
ಕೊಲ್ಲಲೇಬೇಕು. ಅವನು ಮುದಿತನದಲ್ಲಿ ಸಮಾಧಾನ
ದಿಂದ ಸಾಯಲು ಬಿಡಬೇಡ!''
7''ಗಿಲ್ಯಾದಿನವನಾದ ಬರ್ಜಿಲ್ಲೈಯನ ಮಕ್ಕಳಿಗೆ ದಯೆ
ಯನ್ನು ತೋರು. ಅವರು ನಿನಗೆ ಸ್ನೇಹಿತರಾಗಿರಲು ಮತ್ತು
ನಿನ್ನ ಪಂಕ್ತಿಯಲ್ಲಿ ಊಟಮಾಡಲು ಅವಕಾಶ ಮಾಡು.
ನಾನು ನಿನ್ನ ಸೋದರನಾದ ಅಬ್ಷಾಲೋಮನಿಂದ ಓಡಿ
ಹೋದಾಗ ಅವರು ನನಗೆ ಸಹಾಯ ಮಾಡಿದರು.
8''ಗೇರನ ಮಗನಾದ ಶಿಮ್ಮಿಯು ನಿನ್ನೊಡನೆ ಇಲ್ಲಿದ್ದಾ
ನೆಂಬುದನ್ನು ಜ್ಞಾಪಿಸಿಕೊ. ಅವನು ಬಹುರೀಮಿನ
ಬೆನ್ಯಾಮೀನ್ ಕುಲದವನು. ನಾನು ಮಹನಯಿಮಿಗೆ
ಓಡಿಹೋದ ಆ ದಿನದಂದು ಅವನು ನನ್ನ ವಿರುದ್ಧವಾಗಿ
ಶಪಿಸಿದ್ದನ್ನು ಜ್ಞಾಪಿಸಿಕೊ. ನಂತರ ಅವನು ನನ್ನನ್ನು
ಜೋರ್ಡನ್ ನದಿಯ ಹತ್ತಿರ ಭೇಟಿಮಾಡಲು ಬಂದನು.
ಆದರೆ ನಾನು ಯೆಹೋವನ ಸನ್ನಿಧಿಯಲ್ಲಿ, 'ಶಿಮ್ಮಿ ನಾನು
ನಿನ್ನನ್ನು ಕೊಲ್ಲುವುದಿಲ್ಲ' ಎಂದು ವಾಗ್ದಾನ ಮಾಡಿದೆನು.
9ಅವನನ್ನು ದಂಡಿಸದೆ ಬಿಡಬೇಡ. ನೀನು ಬುದ್ಧಿವಂತ!
ಅವನಿಗೆ ಏನು ಮಾಡಬೇಕೆಂಬುದು ನಿನಗೆ ತಿಳಿದಿದೆ.
ಆದರೆ ಅವನು ಮುದಿತನದಲ್ಲಿ ಸಮಾಧಾನದಿಂದ
ಸಾಯಲು ಬಿಡಬೇಡ'' ಎಂದು ಹೇಳಿದನು.
10ನಂತರ ದಾವೀದನು ತೀರಿಕೊಂಡನು. ಅವನನ್ನು
ದಾವೀದ ನಗರದಲ್ಲಿ ಸಮಾಧಿಮಾಡಿದರು.
11ದಾವೀದನು ಇಸ್ರೇಲನ್ನು ನಲವತ್ತು ವರ್ಷಗಳ ಕಾಲ
ಆಳಿದನು. ಅವನು ಏಳು ವರ್ಷ ಹೆಬ್ರೋನಿನಲ್ಲೂ
ಮೂವತ್ತಮೂರು ವರ್ಷ ಜೆರುಸಲೇಮಿನಲ್ಲೂ ಆಡಳಿತ
ನಡೆಸಿದನು. 12ಈಗ ಸೊಲೊಮೋನನು ತನ್ನ ತಂದೆಯ
ಸಿಂಹಾಸನದ ಮೇಲೆ ಕುಳಿತು ಆಡಳಿತ ನಡೆಸತೊಡ
ಗಿದನು. ರಾಜ್ಯವು ಅವನ ಪೂರ್ಣ ಹತೋಟಿಯಲ್ಲಿ ಇತ್ತು.
13ಆ ಸಮಯದಲ್ಲಿ ಹಗ್ಗೀತಳ ಮಗನಾದ ಅದೋನೀ
ಯನು ಸೊಲೊಮೋನನ ತಾಯಿಯಾದ ಬತ್ಷೆಬೆಳ
ಹತ್ತಿರಕ್ಕೆ ಹೋದನು. ಬತ್ಷೆಬೆಳು, ''ನೀನು ಸಮಾಧಾನ
ದಿಂದ ಬಂದೆಯಾ?'' ಎಂದು ಅವನನ್ನು ಕೇಳಿದಳು.
ಅದೋನೀಯನು, ''ಹೌದು, ಇದು ಸಮಾಧಾನದ
ಭೇಟಿಯಾಗಿದೆ. 14ನಾನು ನಿನಗೆ ಒಂದು ವಿಷಯವನ್ನು
ಹೇಳಬೇಕಾಗಿದೆ'' ಎಂದು ಉತ್ತರಿಸಿದನು.
''ಹಾಗಾದರೆ ಹೇಳು'' ಎಂದು ಬತ್ಷೆಬೆಳು ಹೇಳಿದಳು.
15ಅದೋನೀಯನು, ''ಒಂದು ಕಾಲದಲ್ಲಿ ರಾಜ್ಯಾಧಿ
ಕಾರವು ನನ್ನದಾಗಿತ್ತೆಂಬುದು ನಿನ್ನ ನೆನಪಿನಲ್ಲಿದೆ.
ಇಸ್ರೇಲಿನ ಜನರೆಲ್ಲರೂ ನಾನೇ ಅವರ ರಾಜನೆಂದು ತಿಳಿ
ದಿದ್ದರು. ಆದರೆ ಸಂಗತಿಗಳು ಬದಲಾದವು. ಈಗ ನನ್ನ

ಸೋದರನೇ ರಾಜನು. ಯೆಹೋವನು ಅವನನ್ನು ರಾಜನ
ನ್ನಾಗಿ ಆರಿಸಿದನು. [16]ಆದುದರಿಂದ ಈಗ ನನ್ನಲ್ಲಿ ಒಂದು
ಕೋರಿಕೆಯಿದೆ, ಅದನ್ನು ನೀನು ನಿರಾಕರಿಸಬೇಡ''
ಎಂದನು.

ಬತ್ಷೆಬೆಳು, ''ನಿನಗೇನು ಬೇಕಾಗಿದೆ?'' ಎಂದು
ಕೇಳಿದಳು.

[17]ಅದೋನೀಯನು, ''ರಾಜನಾದ ಸೊಲೊಮೋ
ನನು ನೀನು ಏನನ್ನು ಕೇಳಿದರೂ ಮಾಡುತ್ತಾನೆಂಬುದು
ನನಗೆ ತಿಳಿದಿದೆ. ಆದುದರಿಂದ, ಶೂನೇಮಿನ ಅಬೀಷಗ್
ಎಂಬ ಸ್ತ್ರೀಯನ್ನು ನನಗೆ ಕೊಡುವಂತೆ ದಯಮಾಡಿ
ನೀನು ಅವನನ್ನು ಕೇಳು. ನಾನು ಅವಳನ್ನು ಮದುವೆ
ಯಾಗುತ್ತೇನೆ'' ಎಂದು ಹೇಳಿದನು.

[18]ಆಗ ಬತ್ಷೆಬೆಳು, ''ಒಳ್ಳೆಯದು, ನಾನು ನಿನಗಾಗಿ
ರಾಜನೊಂದಿಗೆ ಮಾತನಾಡುತ್ತೇನೆ'' ಎಂದು ಹೇಳಿದಳು.

[19]ಬತ್ಷೆಬೆಳು ರಾಜನಾದ ಸೊಲೊಮೋನನೊಂದಿಗೆ
ಮಾತನಾಡಲು ಹೋದಳು. ಸೊಲೊಮೋನನು ಆಕೆ
ಯನ್ನು ಕಂಡು ಎದ್ದುನಿಂತು ಆವಳಿಗೆ ಬಾಗಿ ನಮಸ್ಕರಿಸಿ,
ಸಿಂಹಾಸನದ ಮೇಲೆ ಕುಳಿತನು. ಅವನು ತನ್ನ ತಾಯಿಗಾಗಿ
ಮತ್ತೊಂದು ಸಿಂಹಾಸನವನ್ನು ತರಲು ಕೆಲವು ಸೇವಕರಿಗೆ
ಹೇಳಿದನು. ನಂತರ ಅವಳು ಅವನ ಬಲಗಡೆಯಲ್ಲಿ
ಕುಳಿತಳು.

[20]ಬತ್ಷೆಬೆಳು ಅವನಿಗೆ, ''ನಿನ್ನಲ್ಲಿ ಒಂದು ಸಣ್ಣ ಕೋರಿಕೆ
ಯಿದೆ, ಅದನ್ನು ದಯವಿಟ್ಟು ನಿರಾಕರಿಸದಿರು'' ಎಂದು
ಕೇಳಿದಳು.

ರಾಜನು, ''ನನ್ನ ತಾಯಿಯೇ, ನಿನ್ನ ಕೋರಿಕೆ
ಯೇನು? ನಾನು ನಿನ್ನ ಕೋರಿಕೆಯನ್ನು ನಿರಾಕರಿಸುವು
ದಿಲ್ಲ'' ಎಂದು ಉತ್ತರಿಸಿದನು.

[21]ಆದುದರಿಂದ ಬತ್ಷೆಬೆಳು, ''ಶೂನೇಮಿನ ಸ್ತ್ರೀಯಾದ
ಅಬೀಷಗಳು ನಿನ್ನ ಸೋದರನಾದ ಅದೋನೀಯನನ್ನು
ಮದುವೆಯಾಗಲಿ'' ಎಂದಳು.

[22]ರಾಜನಾದ ಸೊಲೊಮೋನನು ತನ್ನ ತಾಯಿಗೆ,
''ಅಬೀಷಗಳನ್ನು ಅವನಿಗೆ ಕೊಡು ಎಂಬುದಾಗಿ ನೀನೇಕೆ
ನನ್ನನ್ನು ಕೇಳುತ್ತಿರುವೆ? ಅವನು ನನ್ನ ಹಿರಿಯಣ್ಣನಾಗಿರು
ವುದರಿಂದ ಅವನನ್ನೇ ರಾಜನನ್ನಾಗಿ ಮಾಡೆಂದು ನೀನು
ಕೇಳದಿರುವುದೇಕೆ? ಯಾಜಕನಾದ ಎಬ್ಯಾತಾರನೂ
ಯೋವಾಬನೂ ಅವನಿಗೆ ಬೆಂಬಲವನ್ನು ನೀಡಿದರು!''
ಎಂದು ಉತ್ತರಿಸಿದನು.

[23]ಆಗ ಸೊಲೊಮೋನನು ''ಯೆಹೋವನಾಣೆ,
ಅದೋನೀಯನು ಈ ರೀತಿ ನನ್ನನ್ನು ಕೇಳಿದ್ದಕ್ಕಾಗಿ ಅವನು
ತನ್ನ ಜೀವವನ್ನೇ ಬೆಲೆಯಾಗಿ ತೆರಬೇಕಾಗುವುದು!
[24]ಯೆಹೋವನು ನನ್ನನ್ನು ಇಸ್ರೇಲಿನ ರಾಜನನ್ನಾಗಿ
ಮಾಡಿದನು. ನನ್ನ ತಂದೆಯಾದ ದಾವೀದನ ಸಿಂಹಾಸನ
ವನ್ನು ಆತನು ನನಗೆ ದಯಪಾಲಿಸಿದನು. ಯೆಹೋವನು
ತನ್ನ ವಾಗ್ದಾನದಂತೆ, ನನಗೆ ಮತ್ತು ನನ್ನ ವಂಶಿಕರಿಗೆ
ರಾಜ್ಯಾಧಿಕಾರವನ್ನು ನೀಡಿದನು. ಅದೋನೀಯನು ಈ
ದಿನವೇ ಸಾಯಬೇಕು ಎಂದು ನಾನು ಈ ಎಲ್ಲಾ
ಕಾರ್ಯಗಳನ್ನು ನೆರವೇರಿಸಿದ ದೇವರ ಸನ್ನಿಧಿಯಲ್ಲಿ
ಪ್ರಮಾಣ ಮಾಡುತ್ತೇನೆ'' ಎಂದು ಹೇಳಿದನು.

[25]ರಾಜನಾದ ಸೊಲೊಮೋನನು ಬೆನಾಯನಿಗೆ ಆಜ್ಞಾ
ಪಿಸಿದನು. ಬೆನಾಯನು ಹೋಗಿ ಅದೋನೀಯನನ್ನು
ಕೊಂದುಹಾಕಿದನು.

[26]ಆಗ ರಾಜನಾದ ಸೊಲೊಮೋನನು ಯಾಜಕನಾದ
ಎಬ್ಯಾತಾರನಿಗೆ, ''ನಾನು ನಿನ್ನನ್ನು ಕೊಲ್ಲಲೇಬೇಕು.
ಆದರೆ ಅಣತೋತಿನಲ್ಲಿರುವ ನಿನ್ನ ಮನೆಗೆ ಹಿಂತಿರುಗಿ
ಹೋಗಲು ನಿನಗೆ ಅವಕಾಶ ಕೊಡುತ್ತೇನೆ. ನಾನು ನಿನ್ನನ್ನು
ಕೊಲ್ಲುವುದಿಲ್ಲ ಏಕೆಂದರೆ ನನ್ನ ತಂದೆಯಾದ ದಾವೀದ
ನೊಂದಿಗೆ ನಡೆಯುವಾಗ ಯೆಹೋವನ ಪವಿತ್ರಪೆಟ್ಟಿಗೆ
ಯನ್ನು ಹೊತ್ತುಕೊಂಡು ಹೋಗಲು ನೀನು ಸಹಾಯ
ಮಾಡಿದೆ. ನನ್ನ ತಂದೆಯ ಕಷ್ಟದ ದಿನಗಳಲ್ಲೆಲ್ಲಾ ನೀನೂ
ಅವನ ಕಷ್ಟಗಳಲ್ಲಿ ಪಾಲುಗಾರನಾಗಿದ್ದದ್ದು ನನಗೆ
ತಿಳಿದಿದೆ'' ಎಂದು ಹೇಳಿದನು. [27]ಸೊಲೊಮೋನನು
ಎಬ್ಯಾತಾರನಿಗೆ,

''ನಾನು ನಿನ್ನನ್ನು ಯೆಹೋವನ ಯಾಜಕನಾಗಿ ಸೇವೆ
ಯಲ್ಲಿ ಮುಂದುವರಿಸುವುದಿಲ್ಲ'' ಎಂದು ಹೇಳಿದನು.
ಯೆಹೋವನು ಹೇಳಿದ್ದಂತೆಯೇ ಇದು ಸಂಭವಿಸಿತು.
ಇದು ಶೀಲೋವಿನಲ್ಲಿ ದೇವರು ಯಾಜಕನಾದ ಏಲಿಗೂ
ಅವನ ಕುಟುಂಬದವರಿಗೂ ಹೇಳಿದಂತೆಯೇ ಆಯಿತು.
ಎಬ್ಯಾತಾರನು ಏಲಿಯ ಗೋತ್ರದವನು.

[28]ಯೋವಾಬನು ಈ ಸಂಗತಿಯನ್ನು ಕೇಳಿ ಹೆದರಿದನು.
(ಅವನು ಅಬ್ಷಾಲೋಮನಿಗೆ ಬೆಂಬಲ ನೀಡಿಲ್ಲದಿದ್ದರೂ
ಅದೋನೀಯನಿಗೆ ಬೆಂಬಲ ನೀಡಿದ್ದನು.) ಯೋವಾ
ಬನು ಯೆಹೋವನ ಗುಡಾರಕ್ಕೆ ಓಡಿಹೋಗಿ ಯಜ್ಞ
ವೇದಿಕೆಯ ಕೊಂಬುಗಳನ್ನು ಹಿಡಿದುಕೊಂಡನು.
[29]ಯೋವಾಬನು ಯೆಹೋವನ ಗುಡಾರದಲ್ಲಿ ಯಜ್ಞ
ವೇದಿಕೆಯ ಹತ್ತಿರ ಇದ್ದಾನೆಂದು ಯಾರೋ ಒಬ್ಬನು
ರಾಜನಾದ ಸೊಲೊಮೋನನಿಗೆ ತಿಳಿಸಿದನು. ಆದುದ
ರಿಂದ ಸೊಲೊಮೋನನು ಬೆನಾಯನಿಗೆ, ಹೋಗಿ
ಅವನನ್ನು ಕೊಂದುಬಿಡುವಂತೆ ಆಜ್ಞಾಪಿಸಿದನು.

[30]ಬೆನಾಯನು ಯೆಹೋವನ ಗುಡಾರದೊಳಕ್ಕೆ
ಹೋಗಿ ಯೋವಾಬನಿಗೆ, ''ರಾಜನ ಆಜ್ಞೆಯಂತೆ
'ಹೊರಗೆ ಬಾ!''' ಎಂದು ಹೇಳಿದನು.

ಆದರೆ ಯೋವಾಬನು, ''ಇಲ್ಲ, ನಾನಿಲ್ಲೇ
ಸಾಯುತ್ತೇನೆ'' ಎಂದನು.

ಆದುದರಿಂದ ಬೆನಾಯನು ರಾಜನ ಬಳಿಗೆ ಹಿಂದಿರುಗಿ
ಯೋವಾಬನು ಹೇಳಿದ್ದನ್ನು ತಿಳಿಸಿದನು. 31ಆಗ ರಾಜನು
ಬೆನಾಯನಿಗೆ, ‘‘ಅವನು ಹೇಳಿದಂತೆ ಮಾಡು! ಅವನನ್ನು
ಅಲ್ಲಿಯೇ ಕೊಂದುಬಿಡು. ನಂತರ ಅವನನ್ನು ಸಮಾಧಿ
ಮಾಡು. ಆಗ ನನ್ನ ಕುಟುಂಬದವರು ಮತ್ತು ನಾನು
ಯೋವಾಬನ ದೋಷದಿಂದ ಮುಕ್ತರಾಗುವೆವು. ಮುಗ್ಧ
ಜನರು ಯೋವಾಬನಿಂದ ಕೊಲ್ಲಲ್ಪಟ್ಟ ಕಾರಣ ಈ
ದೋಷವುಂಟಾಯಿತು. 32ಯೋವಾಬನು ತನಗಿಂತಲೂ
ಬಹಳಷ್ಟು ಉತ್ತಮರಾದ ಇಬ್ಬರನ್ನು ಕೊಂದುಹಾಕಿದನು.
ಅವರು ಯಾರೆಂದರೆ: ನೇರನ ಮಗನಾದ ಅಬ್ನೇರ ಮತ್ತು
ಯೆತೆರನ ಮಗನಾದ ಅಮಾಸ. ಅಬ್ನೇರನು ಇಸ್ರೇಲಿನ
ಸೇನಾಧಿಪತಿಯಾಗಿದ್ದನು; ಅಮಾಸನು ಯೆಹೂದದ
ಸೇನಾಧಿಪತಿಯಾಗಿದ್ದನು. ಯೋವಾಬನು ಅವರನ್ನು
ಕೊಂದನೆಂಬುದು ಆ ಸಮಯದಲ್ಲಿ ನನ್ನ ತಂದೆಯಾದ
ದಾವೀದನಿಗೆ ತಿಳಿಯಲಿಲ್ಲ. ಯೋವಾಬನು ಅವರನ್ನು
ಕೊಂದದ್ದರಿಂದ ಯೆಹೋವನು ಅವನನ್ನು ದಂಡಿಸು
ತ್ತಾನೆ. 33ಅವರನ್ನು ಕೊಂದ ಅಪರಾಧವು ಯೋವಾಬನ
ಮೇಲೆಯೂ ಅವನ ಕುಟುಂಬದ ಮೇಲೆಯೂ ಶಾಶ್ವತ
ವಾಗಿರಲಿ. ಆದರೆ ದಾವೀದನನ್ನೂ ಅವನ ಸಂತತಿಯ
ವರನ್ನೂ ಅವನ ಸಿಂಹಾಸನವನ್ನೂ ಯೆಹೋವನು
ಶಾಶ್ವತವಾಗಿ ಆಶೀರ್ವದಿಸಲಿ’’ ಎಂದು ಹೇಳಿದನು.

34ಆದುದರಿಂದ ಯೆಹೋಯಾದಾವನ ಮಗನಾದ
ಬೆನಾಯನು ಯೋವಾಬನನ್ನು ಕೊಂದನು. ಯೋವಾಬ
ನನ್ನು ಅರಣ್ಯದಲ್ಲಿನ ಅವನ ಮನೆಯ ಸಮೀಪದಲ್ಲೇ
ಸಮಾಧಿ ಮಾಡಿದರು. 35 ಆಗ ಯೆಹೋಯಾದಾವನ
ಮಗನಾದ ಬೆನಾಯನನ್ನು ಯೋವಾಬನ ಸ್ಥಾನದಲ್ಲಿ
ಸೇನಾಧಿಪತಿಯನ್ನಾಗಿ ಸೊಲೊಮೋನನು ನೇಮಿಸಿ
ದನು. ಎಬ್ಯಾತಾರನ ಸ್ಥಾನದಲ್ಲಿ ಚಾದೋಕನನ್ನು ನೂತನ
ಪ್ರಧಾನ ಯಾಜಕನನ್ನಾಗಿ ನೇಮಿಸಿದನು. 36ನಂತರ
ರಾಜನು ಶಿಮ್ಮಿಯನ್ನು ಕರೆತರಲು ಕಳುಹಿಸಿದನು.
ರಾಜನು ಅವನಿಗೆ, ‘‘ಜೆರುಸಲೇಮಿನಲ್ಲಿ ನಿನಗಾಗಿ ಒಂದು
ಮನೆಯನ್ನು ನಿರ್ಮಿಸು. ಆ ಮನೆಯಲ್ಲಿ ವಾಸಮಾಡು,
ನಗರವನ್ನು ಬಿಟ್ಟು ಹೋಗದಿರು. 37ನೀನು ನಗರವನ್ನು
ಬಿಟ್ಟು ಕಿದ್ರೋನ್ ಹೊಳೆಯ ಹಿಂದಕ್ಕೆ ಹೋದರೆ,
ನಿನ್ನನ್ನು ಕೊಲ್ಲಲಾಗುವುದು. ಅದು ನಿನ್ನ ಸ್ವಂತ
ತಪ್ಪಾಗುವುದು’’ ಎಂದು ಹೇಳಿದನು.

38ಅದಕ್ಕೆ ಶಿಮ್ಮಿಯು, ‘‘ನನ್ನ ರಾಜನೇ, ನೀನು ಹೇಳಿ
ದಂತೆಯೇ ಆಗಲಿ. ನಾನು ನಿನಗೆ ವಿಧೇಯನಾಗಿರು
ವೆನು’’ ಎಂದು ಉತ್ತರಿಸಿದನು. ಹೀಗೆ ಶಿಮ್ಮಿಯು ಬಹು
ದಿನಗಳವರೆಗೆ ಜೆರುಸಲೇಮಿನಲ್ಲಿ ವಾಸವಾಗಿದ್ದನು.
39ಆದರೆ ಮೂರು ವರ್ಷಗಳ ತರುವಾಯ, ಶಿಮ್ಮಿಯ
ಇಬ್ಬರು ಗುಲಾಮರು ಗತ್ ನಗರದ ರಾಜನ ಬಳಿಗೆ ಓಡಿ
ಹೋದರು. ಆ ರಾಜನ ಹೆಸರು: ಮಾಕನ ಮಗನಾದ
ಆಕೀಷ, ತನ್ನ ಗುಲಾಮರು ಗತ್ ನಗರದಲ್ಲಿರುವುದು
ಶಿಮ್ಮಿಗೆ ತಿಳಿಯಿತು. 40ಆದುದರಿಂದ ಶಿಮ್ಮಿಯು ತಡಿ
ಯನ್ನು ತನ್ನ ಕತ್ತೆಯ ಮೇಲೆ ಹಾಕಿಕೊಂಡು, ಗತ್‌ನ ರಾಜ
ನಾದ ಆಕೀಷನ ಬಳಿಗೆ ಹೋದನು. ಅವನು ತನ್ನ
ಗುಲಾಮರನ್ನು ಅಲ್ಲಿ ಕಂಡುಹಿಡಿದು ತನ್ನ ಮನೆಗೆ ಮತ್ತೆ
ಕರೆದುಕೊಂಡು ಬಂದನು.

41ಆದರೆ ಶಿಮ್ಮಿಯು ಜೆರುಸಲೇಮಿನಿಂದ ಗತ್‌ಗೆ
ಹೋಗಿ ಹಿಂದಿರುಗಿ ಬಂದುದ್ದನ್ನು ಯಾರೋ ಒಬ್ಬರು
ಸೊಲೊಮೋನನಿಗೆ ತಿಳಿಸಿದರು. 42ಸೊಲೊಮೋನನು
ಶಿಮ್ಮಿಯನ್ನು ಕರೆಯಿಸಿ, ‘‘ನೀನು ಜೆರುಸಲೇಮನ್ನು
ಬಿಟ್ಟುಹೋದರೆ ಮರಣಶಿಕ್ಷೆಯಾಗುವುದೆಂದು ನಾನು
ಯೆಹೋವನ ಹೆಸರಿನಲ್ಲಿ ಪ್ರಮಾಣಮಾಡಿದ್ದೆನು. ನೀನು
ಬೇರೆಲ್ಲಾದರೂ ಹೋದರೆ ಅದು ನಿನ್ನ ಸ್ವಂತ ತಪ್ಪಾಗುವು
ದೆಂದೂ ನಿನ್ನನ್ನು ಕೊಲ್ಲಲಾಗುವುದೆಂದೂ ನಾನು ನಿನ್ನನ್ನು
ಎಚ್ಚರಿಸಿದ್ದೆನು. ಅದಕ್ಕೆ ನೀನೂ ಒಪ್ಪಿಗೆ ನೀಡಿ ನನಗೆ
ವಿಧೇಯನಾಗಿರುವುದಾಗಿ ತಿಳಿಸಿದ್ದೆ. 43ನೀನು ದೇವರಿಗೆ
ಮಾಡಿದ ಪ್ರಮಾಣವನ್ನು ಯಾಕೆ ಕೈಕೊಳ್ಳಲಿಲ್ಲ? ನೀನು
ನನ್ನ ಆಜ್ಞೆಗೆ ಯಾಕೆ ವಿಧೇಯನಾಗಲಿಲ್ಲ? 44ನೀನು ನನ್ನ
ತಂದೆಯಾದ ದಾವೀದನಿಗೆ ವಿರುದ್ಧವಾಗಿ ಅನೇಕ
ಕೆಟ್ಟಕಾರ್ಯಗಳನ್ನು ಮಾಡಿರುವೆ ಎಂಬುದು ನಿನಗೆ
ತಿಳಿದಿದೆ. ಈಗ ನಿನ್ನ ಆ ಕೆಟ್ಟ ಕಾರ್ಯಗಳಿಗಾಗಿ
ಯೆಹೋವನು ನಿನ್ನನ್ನು ದಂಡಿಸುತ್ತಾನೆ. 45ಆದರೆ
ಯೆಹೋವನು ನನ್ನನ್ನು ಆಶೀರ್ವದಿಸುತ್ತಾನೆ. ಆತನು
ದಾವೀದನ ಸಿಂಹಾಸನವನ್ನು ಎಂದೆಂದಿಗೂ ಸಂರಕ್ಷಿ
ಸುವನು’’ ಎಂದು ಹೇಳಿದನು.

46ನಂತರ ರಾಜನು ಶಿಮ್ಮಿಯನ್ನು ಕೊಲ್ಲಲು ಬೆನಾಯ
ನಿಗೆ ಆಜ್ಞಾಪಿಸಿದನು. ಅಂತೆಯೇ ಬೆನಾಯನು ಅವನನ್ನು
ಸಂಹರಿಸಿದನು. ಹೀಗೆ ಸೊಲೊಮೋನನ ರಾಜ್ಯಾಧಿ
ಕಾರವು ಸ್ಥಿರವಾಯಿತು.

## ಜ್ಞಾನಕ್ಕಾಗಿ ಸೊಲೊಮೋನನ ಬೇಡಿಕೆ

3 ಸೊಲೊಮೋನನು ಈಜಿಪ್ಟಿನ ರಾಜನಾದ
ಫರೋಹನ ಮಗಳನ್ನು ಮದುವೆಯಾಗಿ ಅವ
ನೊಂದಿಗೆ ಒಂದು ಒಪ್ಪಂದವನ್ನು ಮಾಡಿಕೊಂಡನು.
ಸೊಲೊಮೋನನು ಅವಳನ್ನು ದಾವೀದನಗರಕ್ಕೆ ಕರೆದು
ತಂದನು. ಸೊಲೊಮೋನನು ಆ ಸಮಯದಲ್ಲಿ ತನ್ನ
ಅರಮನೆಯನ್ನು ಮತ್ತು ಯೆಹೋವನ ದೇವಾಲಯ
ವನ್ನು ನಿರ್ಮಿಸುತ್ತಿದ್ದನು. ಜೆರುಸಲೇಮಿನ ಸುತ್ತಲೂ
ಒಂದು ಗೋಡೆಯನ್ನು ಸಹ ಸೊಲೊಮೋನನು
ನಿರ್ಮಿಸುತ್ತಿದ್ದನು. 2ದೇವಾಲಯದ ನಿರ್ಮಾಣವು

ಇನ್ನೂ ಪೂರ್ಣಗೊಂಡಿರಲಿಲ್ಲ. ಆದುದರಿಂದ ಜನರು
ಅದುವರೆವಿಗೂ ಎತ್ತರವಾದ ಸ್ಥಳಗಳಲ್ಲಿ ಯಜ್ಞವೇದಿ
ಕೆಯ ಮೇಲೆ ಪಶುಗಳ ಯಜ್ಞಗಳನ್ನು ಸಮರ್ಪಿಸುತ್ತಿ
ದ್ದರು. [3]ಸೊಲೊಮೋನನು ತನಗೆ ಯೆಹೋವನ
ಮೇಲಿದ್ದ ಪ್ರೀತಿಯನ್ನು ತೋರ್ಪಡಿಸಿದನು. ಅವನ ತಂದೆ
ಯಾದ ದಾವೀದನು ಅವನಿಗೆ ಮಾಡಬೇಕೆಂದು ಹೇಳಿದ್ದ
ಎಲ್ಲ ಕಾರ್ಯಗಳನ್ನು ಮಾಡುವುದರ ಮೂಲಕ ವಿಧೇಯ
ತೆಯನ್ನು ತೋರ್ಪಡಿಸಿದನು. ಆದರೆ ಸೊಲೊಮೋನನು
ತನಗೆ ದಾವೀದನು ಹೇಳದೆ ಇದ್ದ ಕೆಲವು ಕಾರ್ಯಗಳನ್ನೂ
ಮಾಡಿದನು. ಸೊಲೊಮೋನನು ಎತ್ತರವಾದ ಸ್ಥಳಗಳನ್ನು
ಯಜ್ಞವನ್ನರ್ಪಿಸಲು ಮತ್ತು ಧೂಪಹಾಕಲು ಉಪಯೋ
ಗಿಸುತ್ತಿದ್ದನು.

[4]ರಾಜನಾದ ಸೊಲೊಮೋನನು ಯಜ್ಞವನ್ನು
ಅರ್ಪಿಸಲು ಗಿಬ್ಯೋನಿಗೆ ಹೋದನು. ಅದು ಅತ್ಯಂತ
ಮುಖ್ಯವಾದ ಎತ್ತರದ ಸ್ಥಳವಾದುದರಿಂದ ಅವನು ಅಲ್ಲಿಗೆ
ಹೋದನು. ಸೊಲೊಮೋನನು ಒಂದು ಸಾವಿರ ಯಜ್ಞ
ಗಳನ್ನು ಯಜ್ಞವೇದಿಕೆಯ ಮೇಲೆ ಅರ್ಪಿಸಿದನು.
[5]ಸೊಲೊಮೋನನು ಗಿಬ್ಯೋನಿನಲ್ಲಿದ್ದಾಗ, ಯೆಹೋ
ವನು ರಾತ್ರಿ ಕನಸಿನಲ್ಲಿ ಅವನಿಗೆ ದರ್ಶನವನ್ನು ನೀಡಿ,
‘‘ನೀನು ಏನು ಬೇಕಾದರೂ ಕೇಳು. ನಾನು ಅದನ್ನು ನಿನಗೆ
ಕೊಡುತ್ತೇನೆ’’ ಎಂದು ಹೇಳಿದನು.

[6]ಸೊಲೊಮೋನನು, ‘‘ನಿನ್ನ ಸೇವಕನೂ ನನ್ನ
ತಂದೆಯೂ ಆದ ದಾವೀದನಿಗೆ ನೀನು ಬಹಳ ದಯಾಪರ
ನಾಗಿದ್ದೆ. ಅವನು ನಿನ್ನನ್ನು ಅನುಸರಿಸಿದನು. ಅವನು
ಒಳ್ಳೆಯವನಾಗಿದ್ದು ನೀತಿವಂತನಾಗಿ ಬದುಕಿದನು. ಅವನ
ನಂತರ ಅವನ ಮಗನನ್ನು ಅವನ ಸಿಂಹಾಸನದಲ್ಲಿ ಕುಳ್ಳಿರಿಸಿ
ಆಳಲು ನೇಮಿಸಿ ನೀನು ಮಹಾಕೃಪೆಯನ್ನು ತೋರಿಸಿದೆ.
[7]ನನ್ನ ದೇವರಾದ ಯೆಹೋವನೇ, ನನ್ನ ತಂದೆಯ ಸ್ಥಾನ
ದಲ್ಲಿ ನನ್ನನ್ನು ನೀನು ರಾಜನನ್ನಾಗಿ ಮಾಡಿದೆ. ಆದರೆ
ನಾನೊಬ್ಬ ಚಿಕ್ಕ ಮಗುವಿನಂತಿದ್ದೇನೆ. ನಾನು ಮಾಡ
ಬೇಕಾದ ಕಾರ್ಯಗಳನ್ನು ಮಾಡಲು ಇರಬೇಕಾದ ಬುದ್ಧಿ
ವಂತಿಕೆಯು ನನ್ನಲ್ಲಿಲ್ಲ. [8]ನಿನ್ನ ಸೇವಕನಾದ ನಾನು,ನೀನೇ
ಆರಿಸಿಕೊಂಡಿರುವ ಜನರ ನಡುವೆ ಇದ್ದೇನೆ. ಇಲ್ಲಿ
ಅನೇಕಾನೇಕ ಜನರಿದ್ದಾರೆ. ಅವರನ್ನು ಎಣಿಸಲಾಗದು,
ಒಬ್ಬ ಆಡಳಿತಗಾರನು ಅವರ ಮಧ್ಯದಲ್ಲಿದ್ದು ಅನೇಕ
ತೀರ್ಪುಗಳನ್ನು ಮಾಡಬೇಕಾಗುತ್ತದೆ. [9]ಆದುದರಿಂದ
ನಿನ್ನ ಜನರನ್ನು ಒಳ್ಳೆಯ ರೀತಿಯಲ್ಲಿ ಆಳಲು ಮತ್ತು
ಅವರಿಗೆ ಸರಿಯಾದ ತೀರ್ಪುಗಳನ್ನು ನೀಡಲು ನನಗೆ
ವಿವೇಕವನ್ನು ಕರುಣಿಸು ಎಂದನು. ಇದು ನನಗೆ ಸರಿ
ಮತ್ತು ತಪ್ಪುಗಳ ನಡುವಿರುವ ಭೇದವನ್ನು ತಿಳಿಸಿ
ಕೊಡುತ್ತದೆ. ನನಗೆ ಉತ್ತಮವಾದ ವಿವೇಕವಿಲ್ಲದಿದ್ದರೆ,
ನಾನು ಈ ಮಹಾಜನಾಂಗವನ್ನು ಆಳುವುದು ಸಾಧ್ಯ
ವಾಗುವುದಿಲ್ಲ’’ ಎಂದು ಉತ್ತರಿಸಿದನು. [10]ಸೊಲೊಮೋ
ನನ ಈ ಕೋರಿಕೆಯನ್ನು ಕೇಳಿ ಯೆಹೋವನಿಗೆ
ಸಂತೋಷವಾಯಿತು. [11]ಆದುದರಿಂದ ದೇವರು ಅವ
ನಿಗೆ, ‘‘ನೀನು ನಿನಗಾಗಿ ಹೆಚ್ಚು ಆಯುಸ್ಸನ್ನೂ ಕೇಳಲಿಲ್ಲ,
ಶ್ರೀಮಂತಿಕೆಯನ್ನೂ ಕೇಳಲಿಲ್ಲ, ನಿನ್ನ ಶತ್ರುಗಳಿಗೆ ಮರಣ
ವನ್ನು ದಯಪಾಲಿಸೆಂದೂ ಕೇಳಲಿಲ್ಲ, ನೀನು ನ್ಯಾಯ
ವಾದ ತೀರ್ಪು ನೀಡಲು ವಿವೇಕವನ್ನು ಕೇಳಿದೆ. [12]ನಿನ್ನ
ಕೋರಿಕೆಯನ್ನು ಅನುಗ್ರಹಿಸುವೆನು; ನಿನ್ನನ್ನು ಜ್ಞಾನಿಯ
ನ್ನಾಗಿಯೂ ವಿವೇಕಿಯನ್ನಾಗಿಯೂ ಮಾಡುವೆನು.
ಪೂರ್ವಕಾಲದಲ್ಲಿ ನಿನ್ನಂತಹವರು ಯಾರೊಬ್ಬರೂ ಇರ
ಲಿಲ್ಲ ಎನ್ನುವಷ್ಟು ಜ್ಞಾನಿಯನ್ನಾಗಿ ನಿನ್ನನ್ನು ಮಾಡುತ್ತೇನೆ.
ಮುಂದೆ ನಿನ್ನಂತಹವರು ಯಾರೊಬ್ಬರೂ ಇರುವುದಿಲ್ಲ.
[13]ನೀನು ಕೇಳದೆಹೋದ ಬಿನ್ನಹಗಳನ್ನು ನಾನು ನಿನಗೆ
ಅನುಗ್ರಹಿಸುತ್ತೇನೆ. ನಿನ್ನ ಜೀವವಿರುವವರೆಗೆ ನೀನು
ಶ್ರೀಮಂತನಾಗಿದ್ದು ಘನಮಾನವನ್ನು ಹೊಂದುವಿ.
ಪ್ರಪಂಚದಲ್ಲಿ ನಿನ್ನಂತಹ ಉನ್ನತವಾದ ಬೇರೊಬ್ಬ
ರಾಜನು ಇರುವುದಿಲ್ಲ. [14]ನೀನು ನನ್ನ ಕಟ್ಟಳೆಗಳನ್ನು ಆಜ್ಞೆ
ಗಳನ್ನು ಅನುಸರಿಸುವುದರ ಮೂಲಕ ನನಗೆ ವಿಧೇಯ
ನಾಗಿರಬೇಕು ಎಂದು ಹೇಳುತ್ತೇನೆ. ನಿನ್ನ ತಂದೆಯಾದ
ದಾವೀದನು ನಡೆದ ಮಾರ್ಗದಲ್ಲಿ ನೀನೂ ನಡೆ. ಆಗ
ನಾನು ನಿನಗೆ ಧೀರ್ಘಾಯುಸ್ಸನ್ನು ಕೊಡುತ್ತೇನೆ’’ ಎಂದು
ಹೇಳಿದನು.

[15]ಸೊಲೊಮೋನನು ಎಚ್ಚರಗೊಂಡನು. ದೇವರು
ಕನಸಿನಲ್ಲಿ ತನ್ನೊಡನೆ ಮಾತನಾಡಿದನೆಂಬುದು ಅವನಿಗೆ
ತಿಳಿಯಿತು. ನಂತರ ಸೊಲೊಮೋನನು ಜೆರುಸಲೇಮಿಗೆ
ಹೋಗಿ, ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯ
ಎದುರಿನಲ್ಲಿ ನಿಂತುಕೊಂಡನು. ಸೊಲೊಮೋನನು
ಯೆಹೋವನಿಗೆ ಸರ್ವಾಂಗಹೋಮಗಳನ್ನೂ ಸಮಾಧಾನ
ಯಜ್ಞಗಳನ್ನೂ ಅರ್ಪಿಸಿದನು. ಅನಂತರ ಅವನು ತನ್ನ
ಆಳ್ವಿಕೆಗೆ ಸಹಾಯ ಮಾಡಿದ ಎಲ್ಲ ನಾಯಕರಿಗೆ ಮತ್ತು
ಅಧಿಕಾರಿಗಳಿಗೆ ಒಂದು ಔತಣವನ್ನೇರ್ಪಡಿಸಿದನು.

[16]ಒಂದು ದಿನ ಇಬ್ಬರು ವೇಶ್ಯೆಯರು ಸೊಲೊಮೋ
ನನ ಹತ್ತಿರಕ್ಕೆ ಬಂದರು. ಅವರು ರಾಜನ ಎದುರಿನಲ್ಲಿ
ನಿಂತರು. [17]ಒಬ್ಬ ಸ್ತ್ರೀಯು, ‘‘ಸ್ವಾಮಿ, ನಾನು ಮತ್ತು ಈ
ಸ್ತ್ರೀಯು ಒಂದೇ ಮನೆಯಲ್ಲಿ ವಾಸಿಸುತ್ತಿದ್ದೇವೆ.
ನಾವಿಬ್ಬರೂ ಗರ್ಭಿಣಿಯರಾಗಿದ್ದೆವು ಮತ್ತು ನಮ್ಮ
ಮಕ್ಕಳಿಗೆ ಜನ್ಮ ಕೊಡಲು ಸಿದ್ಧರಾಗಿದ್ದೆವು. ಅವಳು ನನ್ನ
ಹತ್ತಿರ ಇದ್ದಾಗ ನಾನು ನನ್ನ ಮಗುವಿಗೆ ಜನ್ಮ ನೀಡಿದೆ.
[18]ಮೂರು ದಿನಗಳ ತರುವಾಯ, ಈ ಸ್ತ್ರೀಯೂ ತನ್ನ
ಮಗುವಿಗೆ ಜನ್ಮ ನೀಡಿದಳು.ಮನೆಯಲ್ಲಿ ನಮ್ಮೊಡನೆ
ಬೇರೆ ಯಾರೂ ಇರಲಿಲ್ಲ. ಅಲ್ಲಿ ನಾವಿಬ್ಬರೇ ಇದ್ದೆವು.
[19]ಒಂದು ರಾತ್ರಿ, ಈ ಸ್ತ್ರೀಯು ಗಾಢ ನಿದ್ರೆಯಲ್ಲಿ ತನ್ನ

ಮಗುವಿನ ಮೇಲೆ ಹೊರಳಿದ್ದರಿಂದ ಆ ಮಗು ಸತ್ತು
ಹೋಯಿತು. 20ಅಂದು ರಾತ್ರಿ ನಾನು ಗಾಢ ನಿದ್ರೆಯಲ್ಲಿ
ರುವಾಗ ಈಕೆಯು ನನ್ನ ಹಾಸಿಗೆಯಿಂದ ನನ್ನ ಮಗುವನ್ನು
ತೆಗೆದುಕೊಂಡು ತನ್ನ ಹಾಸಿಗೆಗೆ ಹೋದಳು; ತನ್ನ ಸತ್ತ
ಮಗುವನ್ನು ನನ್ನ ಹಾಸಿಗೆಯಲ್ಲಿಟ್ಟಳು. 21ಮುಂಜಾನೆ
ನಾನು ಎಚ್ಚರಗೊಂಡು ನನ್ನ ಮಗುವಿಗೆ ಹಾಲು ಕುಡಿಸಲು
ಸಿದ್ಧಳಾದಾಗ ಮಗು ಸತ್ತುಹೋಗಿರುವುದನ್ನು ಕಂಡೆನು.
ಆ ಮಗುವನ್ನು ನಾನು ಸೂಕ್ಷ್ಮವಾಗಿ ನೋಡಿದಾಗ ಆ
ಮಗು ನನ್ನದಲ್ಲವೆಂಬುದು ನನಗೆ ತಿಳಿಯಿತು'' ಎಂದು
ಹೇಳಿದಳು.

22ಆದರೆ ಇನ್ನೊಬ್ಬ ಸ್ತ್ರೀಯು, ''ಇಲ್ಲ! ಜೀವಂತ
ವಾಗಿರುವ ಮಗು ನನ್ನದು. ಸತ್ತಿರುವ ಮಗು ನಿನ್ನದು!''
ಎಂದು ಹೇಳಿದಳು.

ಆದರೆ ಮೊದಲನೆಯ ಸ್ತ್ರೀಯು, ''ಇಲ್ಲ! ನೀನು ಸುಳ್ಳು
ಹೇಳುತ್ತಿರುವೆ! ಸತ್ತಿರುವ ಮಗು ನಿನ್ನದು, ಜೀವಂತ
ವಾಗಿರುವ ಮಗು ನನ್ನದು!'' ಎಂದು ಹೇಳಿದಳು. ಹೀಗೆ
ಆ ಇಬ್ಬರು ಸ್ತ್ರೀಯರು ರಾಜನ ಎದುರಿನಲ್ಲಿ ವಾದಿಸಿದರು.
23ಆಗ ರಾಜನಾದ ಸೊಲೊಮೋನನು, ''ಜೀವಂತ
ವಾಗಿರುವ ಮಗು ನನ್ನದೆಂದೂ ಸತ್ತಿರುವ ಮಗು ಅವಳ
ದೆಂದೂ ನೀವಿಬ್ಬರೂ ಹೇಳುತ್ತಿದ್ದೀರಲ್ಲವೇ?'' ಎಂದು
ಹೇಳಿ,
24ತನ್ನ ಸೇವಕರಿಗೆ ''ಒಂದು ಕತ್ತಿಯನ್ನು ತೆಗೆದು
ಕೊಂಡು ಬಂದು 25ಜೀವಂತವಾಗಿರುವ ಮಗುವನ್ನು
ಕತ್ತರಿಸಿ ಅವರಿಬ್ಬರಿಗೂ ಅರ್ಧರ್ಧ ಮಗುವನ್ನು ಕೊಟ್ಟು
ಬಿಡಿ'' ಎಂದು ಆಜ್ಞಾಪಿಸಿದನು.

26ಆಗ ಎರಡನೆಯ ಸ್ತ್ರೀಯು ''ಈಗ ಸರಿಹೋಯಿತು.
ಮಗುವನ್ನು ಎರಡು ಹೋಳು ಮಾಡಿ. ಆಗ ನಮ್ಮಿಬ್ಬ
ರಿಗೂ ಅವನಿರುವುದಿಲ್ಲ'' ಎಂದಳು.

ಆದರೆ ಮೊದಲನೆಯ ಸ್ತ್ರೀಯು, ಅಂದರೆ, ತನ್ನ ಮಗು
ವಿನ ಮೇಲೆ ತುಂಬಾ ಪ್ರೀತಿಯನ್ನಿಟ್ಟಿದ್ದ ನಿಜವಾದ
ತಾಯಿಯು ರಾಜನಿಗೆ, ''ದಯವಿಟ್ಟು ಆ ಮಗುವನ್ನು
ಕೊಲ್ಲಬೇಡಿ ಸ್ವಾಮಿ! ಅವಳಿಗೇ ಕೊಟ್ಟುಬಿಡಿ'' ಎಂದು
ಹೇಳಿದಳು.
27ಆಗ ಸೊಲೊಮೋನನು,
''ಮಗುವನ್ನು ಕೊಲ್ಲಬೇಡಿ! ಅದನ್ನು ಮೊದಲನೆಯ
ಸ್ತ್ರೀಗೆ ಕೊಡಿ. ಅವಳೇ ನಿಜವಾದ ತಾಯಿ '' ಎಂದು
ಹೇಳಿದನು.
28ಸೊಲೊಮೋನನ ತೀರ್ಪಿನ ವಿಚಾರವು ಇಸ್ರೇಲಿನ
ಜನರಿಗೆ ತಿಳಿಯಿತು. ಅವನು ವಿವೇಕಿಯಾದುದರಿಂದ
ಅವರು ಅವನನ್ನು ಗೌರವಿಸಿದರು ಮತ್ತು ಸನ್ಮಾನಿಸಿದರು.
ಅವನು ದೇವರ ಜ್ಞಾನದಿಂದ ಸಮಂಜಸವಾದ ತೀರ್ಪು
ನೀಡುತ್ತಾನೆಂದು ಅವರು ಕಂಡುಕೊಂಡರು.

## ಸೊಲೊಮೋನನ ರಾಜ್ಯ

4 ರಾಜನಾದ ಸೊಲೊಮೋನನು ಇಸ್ರೇಲಿನ ಜನತೆ
ಯನ್ನೆಲ್ಲ ಆಳಿದನು. 2ಅವನಿಗೆ ಆಳಲು ನೆರವಾದ
ಅವನ ಮುಖ್ಯಾಧಿಕಾರಿಗಳ ಹೆಸರುಗಳು ಹೀಗಿವೆ:
ಚಾದೋಕನ ಮಗನಾದ ಅಜರ್ಯ; (ಅಜರ್ಯನು
ಯಾಜಕನಾಗಿದ್ದನು.)
3ಶೀಷನ ಮಕ್ಕಳಾದ ಎಲೀಹೋರೆಫ್ ಮತ್ತು ಅಹೀ
ಯಾಹು;
ಇವರಿಬ್ಬರೂ ನ್ಯಾಯಾಲಯದಲ್ಲಿ ನಡೆದ ಸಂಗತಿಗಳ
ಕುರಿತಾಗಿ ಟಿಪ್ಪಣಿ ಬರೆಯುವ ಉದ್ಯೋಗವನ್ನು ಹೊಂದಿ
ದ್ದರು. ಅಹೀಲೂದನ ಮಗನಾದ ಯೆಹೋಷಾಫಾಟನು
ಜನರ ಇತಿಹಾಸದ ಕುರಿತು ಟಿಪ್ಪಣಿ ಬರೆದನು.
4ಯೆಹೋಯಾದಾವನ ಮಗನಾದ ಬೆನಾಯ;
ಬೆನಾಯನು ಸೇನಾಧಿಪತಿಯಾಗಿದ್ದನು.
ಚಾದೋಕ ಮತ್ತು ಎಬ್ಯಾತಾರರು; ಚಾದೋಕ ಮತ್ತು
ಎಬ್ಯಾತಾರರು ಯಾಜಕರಾಗಿದ್ದರು.
5ನಾತಾನನ ಮಗನಾದ ಅಜರ್ಯ; ಅಜರ್ಯನು
ಜಿಲ್ಲಾ ಅಧಿಕಾರಿಗಳ ಮೇಲ್ವಿಚಾರಕನಾಗಿದ್ದನು.
ನಾತಾನನ ಮಗನಾದ ಚಾಬೂದ; ಚಾಬೂದನು ರಾಜ
ನಾದ ಸೊಲೊಮೋನನಿಗೆ ಯಾಜಕನೂ ಸಲಹೆಗಾರನೂ
ಆಗಿದ್ದನು.
6ಅಹೀಷಾರ್; ಅಹೀಷಾರನು ರಾಜನ ಅರಮನೆಯ
ಪ್ರತಿಯೊಂದರಲ್ಲೂ ಜವಾಬ್ದಾರನಾಗಿದ್ದನು.
ಅಬ್ದನ ಮಗನಾದ ಅದೋನೀರಾಮ; ಅದೋನೀ
ರಾಮನು ಗುಲಾಮರ ಮೇಲ್ವಿಚಾರಕನಾಗಿದ್ದನು.
7ಇಸ್ರೇಲರನ್ನು ಹನ್ನೆರಡು ವಿಭಾಗ ಮಾಡಿ ಅವುಗಳನ್ನು
ಜಿಲ್ಲೆಗಳೆಂದು ಕರೆದರು. ಪ್ರತಿಯೊಂದು ಜಿಲ್ಲೆಯನ್ನು
ಆಳಲು ಸೊಲೊಮೋನನು ರಾಜ್ಯಪಾಲರನ್ನು ನೇಮಿ
ಸಿದನು. ಈ ರಾಜ್ಯಪಾಲರು ತಮ್ಮ ಜಿಲ್ಲೆಗಳಿಂದ ಆಹಾರ
ಪದಾರ್ಥಗಳನ್ನು ಸಂಗ್ರಹಿಸಿ ರಾಜನಿಗೂ ಅವನ
ಕುಟುಂಬಕ್ಕೂ ಕೊಡಬೇಕೆಂದು ಆಜ್ಞಾಪಿಸಿದನು. ಪ್ರತಿ
ಯೊಬ್ಬ ರಾಜ್ಯಪಾಲನು ವರ್ಷಕ್ಕೆ ಒಂದು ತಿಂಗಳು ರಾಜ
ನಿಗೆ ಆಹಾರ ಪದಾರ್ಥಗಳನ್ನು ಕೊಡುವ ಜವಾಬ್ದಾರಿ
ಯನ್ನು ಹೊಂದಿದ್ದನು. 8ಹನ್ನೆರಡು ರಾಜ್ಯಪಾಲರುಗಳ
ಹೆಸರುಗಳು ಹೀಗಿವೆ:
ಎಫ್ರಾಯೀಮ್ ಬೆಟ್ಟಪ್ರದೇಶಕ್ಕೆ ಬೆನ್‌ಹೂರನು
ರಾಜ್ಯಪಾಲನಾಗಿದ್ದನು.
9ಮಾಕಚ್, ಶಾಲೀಮ್, ಬೇತ್‌ಷೆಮೆಷ್,
ಏಲೋನ್, ಬೇತ್‌ಹಾನಾನ್‌ಗಳಿಗೆ ಬೆನ್‌ದೆಕರನು
ರಾಜ್ಯಪಾಲನಾಗಿದ್ದನು.
10ಅರುಬ್ಬೋತ್, ಸೋಕೋ, ಹೇಫರ್‌ಗಳಿಗೆ ಬೆನ್
ಹೆಸೆದನು ರಾಜ್ಯಪಾಲನಾಗಿದ್ದನು.

[11]ನಾಫೋತ್ ದೋರ್‌ಗೆ ಬೆನ್ ಅಬೀನಾದಾಬನು
ರಾಜ್ಯಪಾಲನಾಗಿದ್ದನು.

ಅವನು ಸೊಲೊಮೋನನ ಮಗಳಾದ ಟಾಫತಳನ್ನು ಮದುವೆಯಾಗಿದ್ದನು.

[12]ತಾಣಕ್, ಮೆಗಿದ್ದೋ ಮತ್ತು ಚಾರೆತಾನಿನ
ಅಂಚಿನಲ್ಲಿದ್ದ ಬೇತ್‌ಷೆಯಾನಿನ ಎಲ್ಲ ಪ್ರದೇಶಕ್ಕೆ ಅಹೀಲೂದನ ಮಗನಾದ ಬಾಣಾ ರಾಜ್ಯಪಾಲನಾಗಿದ್ದನು.

ಇದು ಇಜ್ರೇಲಿನ ತಳದಲ್ಲಿ ಬೇತ್‌ಷೆಯಾನಿನಿಂದ ಅಬೇಲ್ ಮೆಹೋಲವರೆಗಿರುವ, ಯೊಕ್ಮೆಯಾನಿನ ಆಚೆ ಗಿರುವ ಪ್ರದೇಶ.

[13]ರಾಮೋತ್ ಗಿಲ್ಯಾದಿಗೆ ಬೆನ್‌ಗೆಬೆರನು ರಾಜ್ಯಪಾಲ
ನಾಗಿದ್ದನು.

ಗಿಲ್ಯಾದಿನ ಮನಸ್ಸೆಯ ಮಗನಾದ ಯಾಯೀರನ ಗ್ರಾಮಗಳಿಗೂ ಮತ್ತು ಪಟ್ಟಣಗಳೆಲ್ಲಕ್ಕೂ ಅವನು ರಾಜ್ಯ ಪಾಲನಾಗಿದ್ದನು. ಅವನು ಬಾಷಾನಿನ ಅರ್ಗೋಬ್ ಜಿಲ್ಲೆಗೂ ರಾಜ್ಯಪಾಲನಾಗಿದ್ದನು. ಈ ಪ್ರದೇಶದಲ್ಲಿ ಗೋಡೆಗಳಿಂದ ಸುತ್ತುವರಿದ ಅರವತ್ತು ನಗರಗಳಿದ್ದವು. ಈ ನಗರಗಳ ದ್ವಾರದಲ್ಲಿ ಹಿತ್ತಾಳೆಯ ಸಲಾಕೆಗಳುಳ್ಳ ಬಾಗಿಲುಗಳಿದ್ದವು.

[14]ಮಹನಯಿಮಿಗೆ ಇದ್ದೋವಿನ ಮಗನಾದ ಅಹೀನಾ
ದಾಬನು ರಾಜ್ಯಪಾಲನಾಗಿದ್ದನು.

[15]ನಫ್ತಾಲಿಗೆ ಅಹೀಮಾಚನು ರಾಜ್ಯಪಾಲನಾಗಿದ್ದನು.

ಸೊಲೊಮೋನನ ಮಗಳಾದ ಬಾಸೆಮತಳನ್ನು ಇವನು ಮದುವೆಯಾಗಿದ್ದನು.

[16]ಆಶೇರಿಗೂ ಅಲೋತಿಗೂ ಹೂಷೈಯನ ಮಗ
ಬಾಣನು ರಾಜ್ಯಪಾಲನಾಗಿದ್ದನು.

[17]ಇಸ್ಸಾಕಾರಿಗೆ ಫಾರೂಹನ ಮಗನಾದ ಯೆಹೋ
ಷಾಫಾಟನು ರಾಜ್ಯಪಾಲನಾಗಿದ್ದನು.

[18]ಬೆನ್ಯಾಮೀನಿಗೆ ಏಲನ ಮಗನಾದ ಶಿಮ್ಮಿಯು
ರಾಜ್ಯಪಾಲನಾಗಿದ್ದನು.

[19]ಊರಿಯ ಮಗನಾದ ಗೆಬೆರನು ಗಿಲ್ಯಾದಿನ ರಾಜ್ಯ
ಪಾಲನಾಗಿದ್ದನು. ಅಮೋರಿಯರ ರಾಜನಾದ ಸೀಹೋನನು ಮತ್ತು ಬಾಷಾನಿನ ರಾಜನಾದ ಓಗನು ವಾಸವಾಗಿದ್ದ ರಾಜ್ಯವೇ ಗಿಲ್ಯಾದ್. ಆದರೆ ಆ ಜಿಲ್ಲೆಗೆ ಗೆಬೆರ್ ಒಬ್ಬನೇ ರಾಜ್ಯಪಾಲನಾಗಿದ್ದನು.

[20]ಯೆಹೂದದಲ್ಲಿ ಮತ್ತು ಇಸ್ರೇಲಿನಲ್ಲಿ ಅನೇಕ
ಜನರಿದ್ದರು. ಅಲ್ಲಿನ ಜನಸಂಖ್ಯೆಯು ಸಮುದ್ರತೀರದ ಮರಳಿನ ಕಣಗಳಷ್ಟಿತ್ತು. ಜನರು ಸಂತುಷ್ಟರಾಗಿ ಜೀವಿಸುತ್ತಿದ್ದರು. ಅವರು ತಿಂದು ಕುಡಿದು ಸಂತೋಷಿಸುತ್ತಿದ್ದರು.

[21]ಸೊಲೊಮೋನನು ಯೂಫ್ರೇಟೀಸ್ ನದಿಯಿಂದ
ಮೊದಲುಗೊಂಡು ಫಿಲಿಷ್ಟಿಯರ ದೇಶದವರೆಗಿನ ರಾಜ್ಯಗಳನ್ನೆಲ್ಲ ಆಳುತ್ತಿದ್ದನು. ಅವನ ರಾಜ್ಯಾಧಿಕಾರವು ಈಜಿಪ್ಟಿನ ಗಡಿಯವರೆಗೆ ವಿಸ್ತರಿಸಿತ್ತು. ಈ ದೇಶಗಳು ಸೊಲೊಮೋನನಿಗೆ ಕಪ್ಪಕಾಣಿಕೆಯನ್ನು ಕೊಡುತ್ತ ಅವನ ಜೀವಮಾನ ಪೂರ್ತಿ ಅವರು ಅವನಿಗೆ ಅಧೀನ ರಾಗಿದ್ದರು.

[22-23]ಪ್ರತಿದಿನವೂ ಸೊಲೊಮೋನನಿಗೆ ಮತ್ತು ಅವನ
ಪಂಕ್ತಿಯಲ್ಲಿ ಊಟಮಾಡುವವರಿಗೆ ಬೇಕಾದ ಆಹಾರ ಪದಾರ್ಥಗಳು ಹೀಗಿವೆ:

ನೂರೈವತ್ತು ಬುಷೆಲ್ಸ್* ಉತ್ತಮವಾದ
ಗೋಧಿಯ ಹಿಟ್ಟು; ಮುನ್ನೂರು ಬುಷೆಲ್ಸ್*
ಹಿಟ್ಟು; ಚೆನ್ನಾಗಿ ಮೇಯಿಸಿದ ಹತ್ತು ಹಸುಗಳು;
ಹೊಲಗಳಲ್ಲಿ ಮೇಯಿಸಿದ ಇಪ್ಪತ್ತು ಹಸುಗಳು;
ನೂರು ಕುರಿಗಳು; ಇವುಗಳಲ್ಲದೆ ದುಪ್ಪಿ ಜಿಂಕೆ,
ಸಾರಂಗ ಮತ್ತು ಕೊಬ್ಬಿದ ಕೋಳಿಗಳು.

[24]ಸೊಲೊಮೋನನು ಯೂಫ್ರೇಟೀಸ್ ನದಿಯ
ಪಶ್ಚಿಮದ ಪ್ರದೇಶವನ್ನೆಲ್ಲ ಆಳಿದನು. ಈ ದೇಶವು ತಿಪ್ಸಹು
ದಿಂದ ಗಾಜದವರೆಗಿತ್ತು. ಸೊಲೋಮೋನನ ರಾಜ್ಯದ
ಲ್ಲೆಲ್ಲಾ ಶಾಂತಿ ನೆಲೆಸಿತ್ತು. [25]ಸೊಲೊಮೋನನ ಆಳ್ವಿಕೆ
ಯಲ್ಲಿ ಯೆಹೂದದ ಮತ್ತು ಇಸ್ರೇಲಿನ ಜನರೆಲ್ಲರೂ
ದಾನ್‌ನಿಂದ ಬೇರ್ಷೆಬದವರೆಗೆ ಸುರಕ್ಷಿತವಾಗಿದ್ದರು;
ಶಾಂತಿಯಿಂದ ಜೀವಿಸುತ್ತಿದ್ದರು. ಜನರು ತಮ್ಮ ಅಂಜೂರ
ಗಿಡಗಳ ಮತ್ತು ದ್ರಾಕ್ಷಾಲತೆಗಳ ನೆರಳಿನಲ್ಲಿ ಸಮಾಧಾನ
ದಿಂದ ಕುಳಿತಿರುತ್ತಿದ್ದರು.

[26]ಸೊಲೊಮೋನನು ತನ್ನ ರಥಗಳಿಗೆ ಬೇಕಾಗಿದ್ದ
ನಾಲ್ಕು ಸಾವಿರ ಕುದುರೆಗಳಿಗೆ ಬೇಕಾಗುವಷ್ಟು ಸ್ಥಳ ಪಡೆ
ದಿದ್ದನು. ಅವನಲ್ಲಿ ಹನ್ನೆರಡು ಸಾವಿರ ರಾಹುತರಿದ್ದರು.
[27]ರಾಜನಾದ ಸೊಲೊಮೋನನಿಗೆ ಪ್ರತಿ ತಿಂಗಳಿಗೆ
ಬೇಕಾದ ವಸ್ತುಗಳನ್ನು ಅವನ ಹನ್ನೆರಡು ಮಂದಿ ರಾಜ್ಯ
ಪಾಲರಲ್ಲಿ ಒಬ್ಬರು ಸರದಿಯ ಪ್ರಕಾರ ಕೊಡುತ್ತಿದ್ದರು.
ರಾಜನಿಗೂ ಅವನ ಪಂಕ್ತಿಯಲ್ಲಿ ಊಟಮಾಡುವ ಪ್ರತಿ
ಯೊಬ್ಬರಿಗೂ ಆಹಾರ ಪದಾರ್ಥಗಳು ಯಥೇಚ್ಛವಾಗಿರು
ತ್ತಿದ್ದವು. [28]ರಾಜನ ರಥಗಳ ಕುದುರೆಗಳಿಗೆ ಮತ್ತು
ಸವಾರಿಯ ಕುದುರೆಗಳಿಗೆ ಬೇಕಾದ ಹುಲ್ಲನ್ನು ಮತ್ತು
ಬಾರ್ಲಿಯನ್ನು ಈ ರಾಜ್ಯಪಾಲರುಗಳು ಆಯಾಸ್ಥಳಗ
ಳಿಂದ ತಂದು ಕೊಡುತ್ತಿದ್ದರು. [29]ದೇವರು ಸೊಲೊಮೋ
ನನಿಗೆ ಜ್ಞಾನ ವಿವೇಕಗಳನ್ನು ಅನುಗ್ರಹಿಸಿದನು. ಸೊಲೊ
ಮೋನನು ಅನೇಕಾನೇಕ ಸಂಗತಿಗಳನ್ನು ಅರ್ಥಮಾಡಿ

---

**ನೂರೈವತ್ತು ಬುಷೆಲ್ಸ್** ಅಥವಾ 6,600 ಲೀಟರ್, ಅಕ್ಷರಶಃ 30ಕೋರ್ಸ್.

**ಮುನ್ನೂರು ಬುಷೆಲ್ಸ್** ಅಥವಾ 13,200ಲೀಟರ್, ಅಕ್ಷರಶಃ 60 ಕೋರ್ಸ್.

ಕೊಳ್ಳುತ್ತಿದ್ದನು. ಯಾರೂ ಊಹಿಸಿಕೊಳ್ಳಲಾರದಷ್ಟು
ಜ್ಞಾನವನ್ನು ಅವನು ಹೊಂದಿದ್ದನು. 30ಅವನ ಜ್ಞಾನವು
ಈಜಿಪ್ಟಿನ ಗಂಡಸರೆಲ್ಲರ ಜ್ಞಾನಕ್ಕಿಂತಲೂ ಹೆಚ್ಚಿನ
ದಾಗಿತ್ತು. ಸೊಲೊಮೋನನ ಜ್ಞಾನವು ಪೂರ್ವದಿಕ್ಕಿನ
ಜನರೆಲ್ಲರ ಜ್ಞಾನಕ್ಕಿಂತ ವಿಶಾಲವಾಗಿತ್ತು. 31ಪ್ರಪಂಚ
ದಲ್ಲಿನ ಯಾವುದೇ ವ್ಯಕ್ತಿಯ ಜ್ಞಾನಕ್ಕಿಂತಲೂ ಹೆಚ್ಚಿನ
ಜ್ಞಾನವು ಅವನಲ್ಲಿತ್ತು. ಅವನು ಜೆರಹನ ಮಗನಾದ
ಏತಾನನಿಗಿಂತಲೂ ಜ್ಞಾನಿಯಾಗಿದ್ದನು. ಮಾಹೋಲನ
ಮಕ್ಕಳಾದ ಹೇಮಾನ್, ಕಲ್ಕೋಲ್, ದರ್ದರಿಗಿಂತ
ಅವನು ಜ್ಞಾನಿಯಾಗಿದ್ದನು. ರಾಜನಾದ ಸೊಲೊಮೋ
ನನು ಇಸ್ರೇಲ್ ಮತ್ತು ಯೆಹೂದಗಳ ಸುತ್ತಮುತ್ತಲಿನ
ಪ್ರದೇಶಗಳಲ್ಲೆಲ್ಲಾ ಪ್ರಸಿದ್ಧನಾಗಿದ್ದನು. 32ರಾಜನಾದ
ಸೊಲೊಮೋನನು ತನ್ನ ಜೀವಿತದ ಅವಧಿಯಲ್ಲಿ ಮೂರು
ಸಾವಿರ ಜ್ಞಾನೋಪದೇಶಗಳನ್ನೂ ಒಂದು ಸಾವಿರದ
ಐದು ಹಾಡುಗಳನ್ನೂ ಬರೆದನು.

33ಸೊಲೊಮೋನನು ಪ್ರಕೃತಿಯ ಬಗ್ಗೆಯೂ ಹೆಚ್ಚಾಗಿ
ತಿಳಿದುಕೊಂಡನು. ಸೊಲೊಮೋನನು ಲೆಬನೋನಿನ
ದೇವದಾರು ವೃಕ್ಷಗಳಿಂದ ಮೊದಲುಗೊಂಡು ಗೋಡೆ
ಗಳಲ್ಲಿ ಬೆಳೆಯುವ ಗಿಡಗಳವರೆಗೆ, ವಿವಿಧ ರೀತಿಯ
ಸಸ್ಯಗಳ ಬಗ್ಗೆ ಪ್ರಸ್ತಾಪಿಸಿದನು. ರಾಜನಾದ ಸೊಲೊಮೋ
ನನು ಪ್ರಾಣಿಗಳ, ಪಕ್ಷಿಗಳ ಮತ್ತು ಹರಿದಾಡುವ ಜಂತುಗಳ
ಬಗ್ಗೆಯೂ ಪ್ರಸ್ತಾಪಿಸಿದನು. 34ರಾಜನಾದ ಸೊಲೊಮೋ
ನನ ಜ್ಞಾನೋಕ್ತಿಗಳನ್ನು ಕೇಳಲು ಎಲ್ಲಾ ದೇಶಗಳ
ಜನರೂ ಬರುತ್ತಿದ್ದರು. ಎಲ್ಲಾ ದೇಶದ ರಾಜರುಗಳು
ತಮ್ಮ ದೇಶದ ಜ್ಞಾನಿಗಳನ್ನು ರಾಜನಾದ ಸೊಲೊ
ಮೋನನ ಬಳಿಗೆ ಕಳುಹಿಸುತ್ತಿದ್ದರು.

### ಸೊಲೊಮೋನನು ದೇವಾಲಯವನ್ನು ನಿರ್ಮಿಸಿದನು

5 ಹೀರಾಮನು ತೂರಿನ ರಾಜನಾಗಿದ್ದನು. ಹೀರಾ
ಮನು ಯಾವಾಗಲೂ ದಾವೀದನ ಸ್ನೇಹಿತ
ನಾಗಿದ್ದನು. ದಾವೀದನ ನಂತರ ಸೊಲೊಮೋನನು
ನೂತನ ರಾಜನಾದನೆಂದು ಹೀರಾಮನು ಕೇಳಿ, ತನ್ನ
ಸೇವಕರನ್ನು ಸೊಲೊಮೋನನ ಬಳಿಗೆ ಕಳುಹಿಸಿದನು.
2ಸೊಲೊಮೋನನು ರಾಜನಾದ ಹೀರಾಮನಿಗೆ, 3‘‘ನನ್ನ
ತಂದೆಯಾದ ದಾವೀದನು ತನ್ನ ಸುತ್ತಮುತ್ತಲಿನವ
ರೊಂದಿಗೆ ಅನೇಕ ಯುದ್ಧಗಳನ್ನು ಮಾಡಬೇಕಾಯಿತು,
ಆದುದರಿಂದ ಅವನು ತನ್ನ ದೇವರಾದ ಯೆಹೋವನ
ಗೌರವಕ್ಕಾಗಿ ಒಂದು ದೇವಾಲಯವನ್ನು ನಿರ್ಮಿಸಲು
ಸಾಧ್ಯವಾಗಲಿಲ್ಲ. ತನ್ನ ಎಲ್ಲಾ ಶತ್ರುಗಳನ್ನು ಸೋಲಿಸಲು
ಯೆಹೋವನು ಅವಕಾಶ ಕೊಡುವ ತನಕ ರಾಜನಾದ
ದಾವೀದನು ಕಾಯುತ್ತಿದ್ದನು. 4ಆದರೆ ಈಗ ನನ್ನ ದೇವ
ರಾದ ಯೆಹೋವನು ನನ್ನ ದೇಶದಲ್ಲೆಲ್ಲಾ ಶಾಂತಿ ನೆಲೆಸು
ವಂತೆ ಮಾಡಿದ್ದಾನೆ. ಈಗ ನನಗೆ ಶತ್ರುಗಳೇ ಇಲ್ಲ. ನನ್ನ
ಜನರಿಗೆ ಯಾವ ಅಪಾಯವೂ ಇಲ್ಲ.

5ನನ್ನ ತಂದೆಯಾದ ದಾವೀದನಿಗೆ ಯೆಹೋವನು,
‘ನಿನ್ನ ನಂತರ ನಿನ್ನ ಮಗನನ್ನು ನಾನು ರಾಜನನ್ನಾಗಿ
ಮಾಡುತ್ತೇನೆ. ನನ್ನನ್ನು ಸನ್ಮಾನಿಸಲು ನಿನ್ನ ಮಗನು ನನಗೆ
ಒಂದು ದೇವಾಲಯವನ್ನು ಕಟ್ಟುತ್ತಾನೆ’ ಎಂದು ವಾಗ್ದಾನ
ಮಾಡಿದ್ದನು. ಈಗ, ನನ್ನ ದೇವರಾದ ಯೆಹೋವನ
ಗೌರವಾರ್ಥವಾಗಿ ದೇವಾಲಯವನ್ನು ನಿರ್ಮಿಸ
ಬೇಕೆಂದಿದ್ದೇನೆ. 6ಆದುದರಿಂದ ನಿನ್ನ ಸಹಾಯವು ನನಗೆ
ಬೇಕಾಗಿದೆ. ನಿನ್ನ ಜನರನ್ನು ಲೆಬನೋನಿಗೆ ಕಳುಹಿಸು.
ಅಲ್ಲಿ ಅವರು ನನಗಾಗಿ ದೇವದಾರುಮರಗಳನ್ನು ಕಡಿದು
ಬೀಳಿಸಲಿ. ನನ್ನ ಸೇವಕರೂ ನಿನ್ನವರೊಂದಿಗೆ ಕೆಲಸ
ಮಾಡುತ್ತಾರೆ. ನಿನ್ನ ಸೇವಕರಿಗೆ ಗೊತ್ತುಪಡಿಸಿದ ವೇತನ
ವನ್ನು ನಾನು ಕೊಡುತ್ತೇನೆ. ಆದರೆ ನಿನ್ನ ಸಹಾಯ ನನಗೆ
ಬೇಕು. ನಮ್ಮ ಬಡಗಿಗಳು ಚೀದೋನ್ಯರ ಬಡಗಿಗಳಂತೆ
ಕುಶಲಕರ್ಮಿಗಳಲ್ಲ’’ ಎಂದು ಹೇಳಿ ಕಳುಹಿಸಿದನು.

7ಸೊಲೊಮೋನನು ಹೇಳಿದುದನ್ನು ಹೀರಾಮನು
ಕೇಳಿದಾಗ ಬಹಳ ಸಂತೋಷಗೊಂಡು, ‘‘ಈ ಮಹಾ
ಜನಾಂಗಕ್ಕೋಸ್ಕರ ದಾವೀದನಿಗೆ ವಿವೇಕಿಯಾದ ಮಗ
ನನ್ನು ಕರುಣಿಸಿದ್ದಕ್ಕಾಗಿ ನಾನು ಯೆಹೋವನಿಗೆ ಅಭಿ
ನಂದನೆಗಳನ್ನು ಸಲ್ಲಿಸುತ್ತೇನೆ’’ ಎಂದು ಹೇಳಿದನು.
8ನಂತರ ಹೀರಾಮನು ಸೊಲೊಮೋನನಿಗೆ ಈ ಸಂದೇಶ
ವನ್ನು ಕಳುಹಿಸಿದನು:‘‘ನಿನ್ನ ಕೋರಿಕೆಯು ನನಗೆ ತಿಳಿ
ಯಿತು. ನಾನು ನಿನಗೆ ಬೇಕಾದ ಎಲ್ಲ ದೇವದಾರು ಮರ
ಗಳನ್ನು ಮತ್ತು ತುರಾಯಿ ಮರಗಳನ್ನು ಕೊಡುತ್ತೇನೆ.
9ನನ್ನ ಸೇವಕರು ಅವುಗಳನ್ನು ಲೆಬನೋನಿನಿಂದ ಸಮುದ್ರ
ತೀರಕ್ಕೆ ತರುತ್ತಾರೆ. ನಂತರ ನಾನು ಅವುಗಳನ್ನು ಒಟ್ಟಾಗಿ
ಕಟ್ಟಿ, ನೀನು ತಿಳಿಸಿದ ಸ್ಥಳಕ್ಕೆ ತೇಲಿಬಿಡುತ್ತೇನೆ. ಗೊತ್ತು
ಪಡಿಸಿದ ಸ್ಥಳದಲ್ಲಿ ದಿಮ್ಮಿಗಳನ್ನು ಬೇರ್ಪಡಿಸುತ್ತೇನೆ;
ನೀನು ಅವುಗಳನ್ನು ತೆಗೆದುಕೊಳ್ಳಬಹುದು.’’

10-11ಸೊಲೊಮೋನನು ಪ್ರತಿ ವರ್ಷವೂ ಹೀರಾಮ
ನಿಗೆ ಅವನ ಮನೆಯವರಿಗೋಸ್ಕರ ಒಂದು ಲಕ್ಷದ ಇಪ್ಪತ್ತು
ಸಾವಿರ ಬುಷೆಲ್ ಗೋಧಿಯನ್ನು ಮತ್ತು ಒಂದು ಲಕ್ಷದ
ಇಪ್ಪತ್ತು ಸಾವಿರ ಗ್ಯಾಲನ್ ಶುದ್ಧವಾದ ಆಲೀವ್ ಎಣ್ಣೆ
ಯನ್ನು ಕೊಟ್ಟನು. 12ಯೆಹೋವನು ತಾನು ವಾಗ್ದಾನ
ಮಾಡಿದ್ದಂತೆ ಸೊಲೊಮೋನನಿಗೆ ಜ್ಞಾನವನ್ನು ಅನು
ಗ್ರಹಿಸಿದನು. ಹೀರಾಮನ ಮತ್ತು ಸೊಲೊಮೋನನ
ನಡುವೆ ಸಮಾಧಾನವಿತ್ತು. ಈ ಇಬ್ಬರು ರಾಜರುಗಳು
ತಮ್ಮತಮ್ಮಲ್ಲಿ ಒಂದು ಒಪ್ಪಂದವನ್ನು ಮಾಡಿಕೊಂಡರು.

13ರಾಜನಾದ ಸೊಲೊಮೋನನು ಇಸ್ರೇಲಿನ
ಮೂವತ್ತು ಸಾವಿರ ಜನರನ್ನು ಬಲತ್ಕಾರದಿಂದ
ಈ ಕಾರ್ಯಕ್ಕೆ ನೇಮಿಸಿದನು. 14ರಾಜನಾದ

ಸೊಲೊಮೋನನು ಅದೋನಿರಾಮ ಎಂಬವನನ್ನು
ಇವರಿಗೆ ಮೇಲ್ವಿಚಾರಕನನ್ನಾಗಿ ನೇಮಿಸಿದನು. ಸೊಲೋ
ಮೋನನು ಅವರನ್ನು ಮೂರು ಗುಂಪುಗಳಾಗಿ ವಿಂಗಡಿ
ಸಿದನು. ಒಂದೊಂದು ಗುಂಪಿನಲ್ಲಿ ಹತ್ತು ಸಾವಿರ
ಜನರಿದ್ದರು. ಪ್ರತಿಯೊಂದು ಗುಂಪಿನವರು ಲೆಬನೋನಿ
ನಲ್ಲಿ ಒಂದು ತಿಂಗಳು ಕೆಲಸ ಮಾಡಿದ ನಂತರ ಎರಡು
ತಿಂಗಳು ಮನೆಗೆ ಹಿಂತಿರುಗುತ್ತಿದ್ದರು. 15ಸೊಲೊಮೋ
ನನು ಎಂಭತ್ತು ಸಾವಿರ ಜನರನ್ನು ಬಲಾತ್ಕಾರದಿಂದ
ಬೆಟ್ಟಪ್ರದೇಶದಲ್ಲಿ ಕೆಲಸ ಮಾಡಲು ನೇಮಿಸಿದನು. ಈ
ಜನರು ಕಲ್ಲುಗಣಿಯಲ್ಲಿ ಕೆಲಸ ಮಾಡುತ್ತಿದ್ದರು. ಅಲ್ಲಿ
ಎಪ್ಪತ್ತು ಸಾವಿರ ಜನರು ಕಲ್ಲುಗಳನ್ನು ಹೊರುತ್ತಿದ್ದರು.
16ಅಲ್ಲಿ ಕೆಲಸ ಮಾಡುವ ಜನರ ಮೇಲ್ವಿ ಚಾರಕರಾಗಿ
ಮೂರು ಸಾವಿರದ ಮುನ್ನೂರು ಜನರಿದ್ದರು.

17ರಾಜನಾದ ಸೊಲೊಮೋನನು ದೇವಾಲಯದ ಅಡಿ
ಪಾಯಕ್ಕಾಗಿ ದೊಡ್ಡದಾದ ಹಾಗೂ ಬೆಲೆಬಾಳುವ ಕಲ್ಲು
ಗಳನ್ನು ಕೊರೆದು ತೆಗೆಯಲು ಆಜ್ಞಾಪಿಸಿದನು. ಈ ಕಲ್ಲು
ಗಳನ್ನು ಬಹು ಜಾಗರೂಕತೆಯಿಂದ ಕತ್ತರಿಸಿ ತೆಗೆದರು.
18ನಂತರ ಸೊಲೊಮೋನನ ಮತ್ತು ಹೀರಾಮನ ಕಟ್ಟಡ
ಕಟ್ಟುವವರು ಮತ್ತು ಗೆಬಾಲ್ಯ ಜನರು ಈ ಕಲ್ಲುಗಳನ್ನು
ಕೆತ್ತಿದರು. ಅವರು ಕಲ್ಲುಗಳನ್ನು ಮತ್ತು ತೊಲೆಗಳನ್ನು
ದೇವಾಲಯದ ನಿರ್ಮಾಣಕ್ಕಾಗಿ ಸಿದ್ಧಗೊಳಿಸಿದರು.

## ಸೊಲೊಮೋನನು ದೇವಾಲಯವನ್ನು ನಿರ್ಮಿಸಿದನು

6 ಇಸ್ರೇಲಿನ ಜನರು ಈಜಿಪ್ಟನ್ನು ಬಿಟ್ಟ ನಾನೂರ
ಎಂಭತ್ತನೆಯ ವರ್ಷದಲ್ಲಿ ಅಂದರೆ ರಾಜನಾದ
ಸೊಲೊಮೋನನು ಇಸ್ರೇಲನ್ನು ಆಳಲಾರಂಭಿಸಿದ ನಾಲ್ಕ
ನೆಯ ವರ್ಷದಲ್ಲಿ ದೇವಾಲಯದ ನಿರ್ಮಾಣವು ಆರಂಭ
ಗೊಂಡಿತು. ಅದು ವರ್ಷದ ಎರಡನೆಯ ತಿಂಗಳಾದ
ಜೀಪ್ ತಿಂಗಳಲ್ಲಿ ಆರಂಭಗೊಂಡಿತು. 2ದೇವಾಲಯವು
ತೊಂಭತ್ತು ಅಡಿ ಉದ್ದ ಮೂವತ್ತು ಅಡಿ ಅಗಲ ಮತ್ತು
ನಲವತ್ತೈದು ಅಡಿ ಎತ್ತರವಾಗಿತ್ತು. 3ದೇವಾಲಯದ
ಮುಂದಿನ ಮಂಟಪವು ಮೂವತ್ತು ಅಡಿ ಉದ್ದ ಮತ್ತು
ನಲವತ್ತೈದು ಅಡಿ ಅಗಲವಾಗಿತ್ತು. ಮುಂದಿನ ಮಂಟಪವು
ದೇವಾಲಯದ ಮುಖ್ಯಸ್ಥಳದುದ್ದಕ್ಕೂ ವ್ಯಾಪಿಸಿತ್ತು.
ಮಂಟಪದ ಉದ್ದವು ದೇವಾಲಯದ ಅಗಲಕ್ಕೆ ಸಮ
ನಾಗಿತ್ತು. 4ದೇವಾಲಯದಲ್ಲಿ ಕಿರಿದಾದ ಕಿಟಕಿಗಳಿದ್ದವು.
ಈ ಕಿಟಕಿಗಳು ಹೊರಗಡೆಯಲ್ಲಿ ಕಿರಿದಾಗಿಯೂ ಮತ್ತು
ಒಳಗಡೆ ದೊಡ್ಡದಾಗಿಯೂ ಇದ್ದವು. 5ನಂತರ ಸೊಲೊ
ಮೋನನು ದೇವಾಲಯದ ಗೋಡೆಯ ಸುತ್ತಲೂ
ಸಾಲಾಗಿ ಕೊಠಡಿಗಳನ್ನು ನಿರ್ಮಿಸಿದನು. ಈ ಕೊಠಡಿ
ಗಳನ್ನು ಒಂದರ ಮೇಲೆ ಮತ್ತೊಂದನ್ನು ಕಟ್ಟಿಸಿದನು. ಈ
ಸಾಲು ಕೊಠಡಿಗಳು ಮೂರು ಅಂತಸ್ತುಗಳನ್ನು
ಹೊಂದಿದ್ದವು. 6ಈ ಕೊಠಡಿಗಳು ದೇವಾಲಯದ ಗೋಡೆ
ಯನ್ನು ಸ್ಪರ್ಶಿಸಿದರೂ, ಅವುಗಳ ತೊಲೆಗಳು ಗೋಡೆ
ಯಲ್ಲಿ ಸೇರಿಕೊಂಡಿರಲಿಲ್ಲ. ಆ ದೇವಾಲಯದ
ಗೋಡೆಯ ಮೇಲ್ಭಾಗವು ತೆಳುವಾಗಿತ್ತು. ಆ ಕೊಠಡಿಗಳ
ಒಂದು ಕಡೆಯ ಗೋಡೆಯು, ಅದರ ಕೆಳಭಾಗದ ಗೋಡೆ
ಗಿಂತ ತೆಳುವಾಗಿತ್ತು. ಕೆಳ ಅಂತಸ್ತಿನ ಕೊಠಡಿಗಳ ಅಗಲ
ಏಳುವರೆ ಅಡಿಗಳು. ಮಧ್ಯದ ಅಂತಸ್ತಿನ ಕೊಠಡಿಗಳ
ಅಗಲ ಒಂಭತ್ತು ಅಡಿಗಳು. ಅದರ ಮೇಲಿನ ಕೊಠಡಿಗಳ
ಅಗಲ ಹತ್ತೂವರೆ ಅಡಿಗಳು. 7ಈ ಗೋಡೆಗಳನ್ನು ಕಟ್ಟಲು
ಕೆಲಸಗಾರರು ದೊಡ್ಡದೊಡ್ಡ ಕಲ್ಲುಗಳನ್ನು ಬಳಸಿದ್ದರು.
ಕಲ್ಲುಗಣಿಯಿಂದ ಕಲ್ಲುಗಳನ್ನು ಹೊರಗೆ ತೆಗೆಯು
ವಾಗಲೇ ಕೆಲಸಗಾರರು ಈ ಕಲ್ಲುಗಳನ್ನು ಕೆತ್ತಿದ್ದರು.
ಆದುದರಿಂದ ಸುತ್ತಿಗೆ, ಉಳಿ ಮುಂತಾದ ಕಬ್ಬಿಣದ ಉಪ
ಕರಣಗಳ ಶಬ್ದವು ದೇವಾಲಯದಲ್ಲಿ ಕೇಳಿಸುತ್ತಿರಲಿಲ್ಲ.

8ಕೆಳಅಂತಸ್ತಿನ ಕೊಠಡಿಗಳ ಪ್ರವೇಶವು ದೇವಾಲಯದ
ದಕ್ಷಿಣದ ಕಡೆಗಿತ್ತು. ಎರಡನೆಯ ಅಂತಸ್ತಿನ ಕೊಠಡಿಗಳಿಗೆ
ಹೋಗುವ ಮೆಟ್ಟಿಲುಗಳು ಒಳಗಡೆಯಿದ್ದು, ಅಲ್ಲಿಂದ
ಮೂರನೆಯ ಅಂತಸ್ತಿನ ಕೊಠಡಿಗಳಿಗೂ ಹೋಗ
ಬಹುದಾಗಿತ್ತು.

9ಸೊಲೊಮೋನನು ದೇವಾಲಯದ ನಿರ್ಮಾಣವನ್ನು
ಮುಗಿಸಿದನು. ದೇವಾಲಯದೊಳಗಿನ ಪ್ರತಿಯೊಂದು
ಭಾಗವನ್ನು ದೇವದಾರು ಮರದ ಹಲಗೆಗಳಿಂದ
ಹೊದಿಸಿದನು. 10ಸೊಲೊಮೋನನು ದೇವಾಲಯದ
ಸುತ್ತಲಿನ ಕೊಠಡಿಗಳ ನಿರ್ಮಾಣವನ್ನೂ ಮುಗಿಸಿದನು.
ಒಂದೊಂದು ಅಂತಸ್ತು ಏಳೂವರೆ ಅಡಿಗಳಷ್ಟು ಎತ್ತರ
ವಾಗಿತ್ತು. ಈ ಕೊಠಡಿಗಳ ದೇವದಾರು ತೊಲೆಗಳು
ದೇವಾಲಯವನ್ನು ಸ್ಪರ್ಶಿಸುತ್ತಿದ್ದವು.

11-12ಯೆಹೋವನು ಸೊಲೊಮೋನನಿಗೆ, ‘‘ನನ್ನ
ಎಲ್ಲಾ ನಿಯಮಗಳಿಗೆ ಮತ್ತು ಆಜ್ಞೆಗಳಿಗೆ ನೀನು ವಿಧೇಯ
ನಾಗಿದ್ದರೆ, ನಿನ್ನ ತಂದೆಯಾದ ದಾವೀದನಿಗೆ ನಾನು
ವಾಗ್ದಾನ ಮಾಡಿದವುಗಳನ್ನು ನಿನಗಾಗಿ ಈಡೇರಿಸುತ್ತೇನೆ.
13ನೀನು ನಿರ್ಮಿಸುತ್ತಿರುವ ಈ ದೇವಾಲಯದಲ್ಲಿ ನಾನು
ಇಸ್ರೇಲರೊಂದಿಗೆ ವಾಸಿಸುತ್ತೇನೆ. ನಾನು ಅವರನ್ನು
ಎಂದೆಂದಿಗೂ ಬಿಟ್ಟುಹೋಗುವುದಿಲ್ಲ’’ ಎಂದು
ಹೇಳಿದನು.

## ದೇವಾಲಯದ ವಿವರಗಳು

14ಸೊಲೊಮೋನನು ದೇವಾಲಯದ ನಿರ್ಮಾಣ
ವನ್ನು ಮುಗಿಸಿದನು. 15ದೇವಾಲಯದ ಒಳಗಿನ ಗೋಡೆ
ಗಳಿಗೆ ದೇವದಾರು ಮರದ ಹಲಗೆಗಳನ್ನು ನೆಲದಿಂದ

ಮಾಳಿಗೆಯವರೆಗೆ ಹೊದಿಸಿದ್ದರು. ಕಲ್ಲಿನ ನೆಲಕ್ಕೆ
ತುರಾಯಿ ಮರದ ಹಲಗೆಗಳನ್ನು ಹಾಸಿದ್ದರು. 16ದೇವಾ
ಲಯದ ಹಿಂಭಾಗದಲ್ಲಿ ಅವರು ಮೂವತ್ತು ಅಡಿ ಉದ್ದ
ವಾಗಿರುವ ಒಂದು ಕೊಠಡಿಯನ್ನು ನಿರ್ಮಿಸಿದ್ದರು. ಈ
ಕೊಠಡಿಯ ಗೋಡೆಗಳಿಗೂ ದೇವದಾರು ಮರದ ಹಲಗೆ
ಗಳನ್ನು ನೆಲದಿಂದ ಮಾಳಿಗೆಯವರೆಗೆ ಹೊದಿಸಿದ್ದರು. ಈ
ಕೊಠಡಿಯನ್ನು ಮಹಾ ಪವಿತ್ರಸ್ಥಳವೆಂದು ಕರೆದರು.
17ಈ ಮಹಾಪವಿತ್ರಸ್ಥಳದ ಎದುರಿನಲ್ಲಿ ದೇವಾಲಯದ
ಮುಖ್ಯ ಭಾಗವಿದೆ. ಈ ಕೊಠಡಿಯ ಉದ್ದ ಅರವತ್ತು ಅಡಿ.
18ಈ ಕೊಠಡಿಯ ಗೋಡೆಗಳಿಗೆ ದೇವದಾರುಮರದ
ಹೊದಿಕೆಗಳನ್ನು ಹೊದಿಸಲಾಗಿದ್ದು ಈ ಗೋಡೆಗಳಲ್ಲಿದ್ದ
ಯಾವುದೇ ಕಲ್ಲುಗಳು ಕಂಡು ಬರುತ್ತಿರಲಿಲ್ಲ. ಈ ದೇವ
ದಾರುಮರದ ಹಲಗೆಗಳ ಮೇಲೆ ಹೂಗಳ ಮತ್ತು ಬಳ್ಳಿಗಳ
ಚಿತ್ರಗಳನ್ನು ಕೆತ್ತಲಾಗಿತ್ತು.

19ಸೊಲೊಮೋನನು ದೇವಾಲಯದ ಹಿಂದಿನ ಭಾಗ
ದಲ್ಲಿ ಒಳಗಡೆ ಒಂದು ಕೋಣೆಯನ್ನು ಸಿದ್ಧಪಡಿಸಿದನು.
ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು ಇಡುವುದ
ಕ್ಕಾಗಿಯೇ ಈ ಕೊಠಡಿಯನ್ನು ಸಿದ್ಧಪಡಿಸಲಾಗಿತ್ತು. 20ಈ
ಕೊಠಡಿಯು ಮೂವತ್ತು ಅಡಿ ಉದ್ದ ಮೂವತ್ತು ಅಡಿ
ಅಗಲ ಮತ್ತು ಮೂವತ್ತು ಅಡಿ ಎತ್ತರವಾಗಿತ್ತು.
21ಸೊಲೊಮೋನನು ಶುದ್ಧ ಚಿನ್ನದ ತಗಡನ್ನು ಈ
ಕೊಠಡಿಗೆ ಹೊದಿಸಿದನು. ಈ ಕೊಠಡಿಯ ಮುಂದೆ
ಧೂಪವೇದಿಕೆಯನ್ನು ಅವನು ನಿರ್ಮಿಸಿದನು. ಅವನು ಆ
ವೇದಿಕೆಗೆ ಚಿನ್ನದ ಹೊದಿಕೆಯನ್ನೂ ಅದರ ಸುತ್ತಲೂ
ಚಿನ್ನದ ಸರಪಣಿಗಳನ್ನೂ ಜೋಡಿಸಿದನು. ಆ ಕೊಠಡಿ
ಯಲ್ಲಿ ಎರಡು ಕೆರೂಬಿಗಳ ಪ್ರತಿಮೆಗಳಿದ್ದವು. ಆ ಪ್ರತಿಮೆ
ಗಳಿಗೆ ಚಿನ್ನದ ಹೊದಿಕೆಯನ್ನು ಹೊದಿಸಿದ್ದರು. 22ದೇವಾ
ಲಯಕ್ಕೆಲ್ಲ ಚಿನ್ನದ ಹೊದಿಕೆಯನ್ನು ಹೊದಿಸಿದ್ದರು.
ಅಲ್ಲದೆ, ಮಹಾಪವಿತ್ರಸ್ಥಳದ ಮುಂದಿನ ಯಜ್ಞವೇದಿ
ಕೆಗೂ ಚಿನ್ನದ ಹೊದಿಕೆಯನ್ನು ಹೊದಿಸಿದ್ದರು.

23ಕೆಲಸಗಾರರು ರೆಕ್ಕೆಗಳಿರುವ ಎರಡು ಕೆರೂಬಿಗಳ
ಪ್ರತಿಮೆಗಳನ್ನು ಆಲೀವ್‌ಮರದಿಂದ ಮಾಡಿ ಅವುಗಳನ್ನು
ಮಹಾಪವಿತ್ರ ಸ್ಥಳದಲ್ಲಿಟ್ಟರು. ಒಂದೊಂದು ಪ್ರತಿಮೆಯು
೧೫ ಅಡಿ ಎತ್ತರವಾಗಿತ್ತು. 24-26ಈ ಎರಡು ಕೆರೂಬಿಗಳು
ಅಳತೆಯಲ್ಲಿಯೂ ಆಕಾರದಲ್ಲಿಯೂ ಒಂದೇ ರೀತಿ
ಯಾಗಿದ್ದವು. ಪ್ರತಿಯೊಂದು ಕೆರೂಬಿಗಳಿಗೆ ಎರಡು
ರೆಕ್ಕೆಗಳಿದ್ದವು. ಪ್ರತಿಯೊಂದು ರೆಕ್ಕೆಯ ಉದ್ದ ಏಳುವರೆ
ಅಡಿಗಳು. ಒಂದು ರೆಕ್ಕೆಯಿಂದ ಮತ್ತೊಂದು ರೆಕ್ಕೆಯ
ಕೊನೆಗಿರುವ ಅಂತರ ಹದಿನೈದು ಅಡಿಗಳು. ಪ್ರತಿ
ಯೊಂದು ಕೆರೂಬಿಯ ಎತ್ತರ ಹದಿನೈದು ಅಡಿಗಳು. 27ಈ
ಕೆರೂಬಿಗಳನ್ನು ಮಹಾಪವಿತ್ರ ಸ್ಥಳ ದಲ್ಲಿಟ್ಟರು. ಅವುಗಳು
ಒಂದಕ್ಕೊಂದು ಸಮೀಪದಲ್ಲಿದ್ದವು. ಅವುಗಳ ರೆಕ್ಕೆಗಳು
ಕೊಠಡಿಯ ಮಧ್ಯಭಾಗದಲ್ಲಿ ಒಂದನ್ನೊಂದು ತಾಕುತ್ತಿ
ದ್ದುವು. ಉಳಿದೆರಡು ರೆಕ್ಕೆಗಳು ಎರಡು ಕಡೆಗಳಲ್ಲಿದ್ದ
ಗೋಡೆಗಳನ್ನು ತಾಕುತ್ತಿದ್ದುವು. 28ಈ ಎರಡು ಕೆರೂಬಿ
ಗಳಿಗೆ ಚಿನ್ನದ ತಗಡನ್ನು ಹೊದಿಸ ಲಾಗಿತ್ತು.

29ಮುಖ್ಯಕೊಠಡಿಯ ಮತ್ತು ಒಳಕೋಣೆಯ ಗೋಡೆ
ಗಳ ಮೇಲೆ ಕೆರೂಬಿಗಳ, ಖರ್ಜೂರ ವೃಕ್ಷಗಳ ಮತ್ತು
ಹೂಗಳ ಚಿತ್ರಗಳನ್ನು ಕೆತ್ತಿದ್ದರು. 30ಈ ಎರಡು ಕೊಠಡಿ
ಗಳ ನೆಲಕ್ಕೆ ಚಿನ್ನದ ತಗಡನ್ನು ಹಾಸಿದ್ದರು.

31ಕೆಲಸಗಾರರು ಆಲೀವ್ ಮರದ ಎರಡು ಬಾಗಿಲು
ಗಳನ್ನು ಮಾಡಿದರು. ಅವರು ಮಹಾಪವಿತ್ರ ಸ್ಥಳದ
ಪ್ರವೇಶದ್ವಾರದಲ್ಲಿ ಈ ಎರಡು ಬಾಗಿಲುಗಳನ್ನು ಇಟ್ಟರು.
ಬಾಗಿಲಿನ ಚೌಕಟ್ಟನ್ನು ಪಂಚಕೋಣಾಕೃತಿಯಲ್ಲಿ ಮಾಡಿ
ದ್ದರು. 32ಅವರು ಆಲೀವ್ ಮರದಿಂದ ಎರಡು ಬಾಗಿಲು
ಗಳನ್ನು ಮಾಡಿದರು. ಕೆಲಸಗಾರರು ಕೆರೂಬಿಗಳ,
ಖರ್ಜೂರ ವೃಕ್ಷಗಳ ಮತ್ತು ಹೂಗಳ ಚಿತ್ರಗಳನ್ನು
ಬಾಗಿಲುಗಳ ಮೇಲೆ ಕೆತ್ತಿದರು. ನಂತರ ಬಾಗಿಲುಗಳಿಗೆ
ಚಿನ್ನವನ್ನು ಹೊದಿಸಿದರು.

33ಅವರು ಮುಖ್ಯ ಕೊಠಡಿಯ ಪ್ರವೇಶಕ್ಕೂ ಬಾಗಿಲು
ಗಳನ್ನು ಮಾಡಿದರು. ಅವರು ಚೌಕಾಕಾರದ ಬಾಗಿಲಿನ
ಚೌಕಟ್ಟನ್ನು ಆಲೀವ್ ಮರದಿಂದ ಮಾಡಿದರು.
34ನಂತರ ಅವರು ತುರಾಯಿ ಮರದ ಬಾಗಿಲುಗಳನ್ನು
ಮಾಡಿದರು. ಅಲ್ಲಿ ಎರಡು ಬಾಗಿಲುಗಳಿದ್ದು, ಪ್ರತಿ
ಯೊಂದು ಮಡಿಸುವಂತಹ ಎರಡು ಭಾಗಗಳನ್ನು ಹೊಂದಿ
ದ್ದವು. 35ಅವರು ಕೆರೂಬಿಗಳ, ಖರ್ಜೂರವೃಕ್ಷಗಳ ಮತ್ತು
ಹೂಗಳ ಚಿತ್ರಗಳನ್ನು ಬಾಗಿಲುಗಳ ಮೇಲೆ ಕೆತ್ತಿದ್ದರು.
ಅವರು ಅವುಗಳಿಗೆ ಚಿನ್ನವನ್ನು ಹೊದಿಸಿದರು.

36ನಂತರ ಅವರು ಒಳಾಂಗಣವನ್ನು ನಿರ್ಮಿಸಿದರು.
ಅವರು ಒಳಾಂಗಣದ ಸುತ್ತಲೂ ಗೋಡೆಗಳನ್ನು ನಿರ್ಮಿಸಿ
ದರು. ಪ್ರತಿಯೊಂದು ಗೋಡೆಯು ಕತ್ತರಿಸಿದ ಕಲ್ಲುಗಳ
ಮೂರು ಸಾಲುಗಳನ್ನೂ ದೇವದಾರುಮರದ ತೊಲೆಗಳ
ಒಂದು ಸಾಲನ್ನೂ ಹೊಂದಿತ್ತು.

37ಅವರು ವರ್ಷದ ಎರಡನೆಯ ತಿಂಗಳಿನ ವೈಶಾಖ
ಮಾಸದಲ್ಲಿ ದೇವಾಲಯವನ್ನು ಕಟ್ಟಲಾರಂಭಿಸಿದರು.
ಇಸ್ರೇಲನ್ನು ಸೊಲೊಮೋನನು ಆಳಲು ಆರಂಭಿಸಿದ
ನಾಲ್ಕನೆಯ ವರ್ಷದಲ್ಲಿ ಇದು ನಡೆಯಿತು. 38ಈ ದೇವಾಲ
ಯದ ನಿರ್ಮಾಣವು ವರ್ಷದ ಎಂಟನೆಯ ತಿಂಗಳಾದ
ಕಾರ್ತಿಕ ಮಾಸದಲ್ಲಿ ಮುಗಿಯಿತು. ಅದು ಸೊಲೊಮೋ
ನನ ಆಳ್ವಿಕೆಯ ಹನ್ನೊಂದನೆಯ ವರ್ಷವಾಗಿತ್ತು.
ದೇವಾಲಯವನ್ನು ಕಟ್ಟಲು ಏಳು ವರ್ಷ ಹಿಡಿಯಿತು.
ದೇವಾಲಯವನ್ನು ಅದರ ನಿಯಮಾನುಸಾರವಾಗಿ
ಕಟ್ಟಿದರು.

### ಸೊಲೊಮೋನನ ಅರಮನೆ

7 ಸೊಲೊಮೋನನು ತನಗಾಗಿ ಒಂದು ಅರ
ಮನೆಯನ್ನು ನಿರ್ಮಿಸಿದನು. ಸೊಲೊಮೋನನ
ಅರಮನೆಯನ್ನು ನಿರ್ಮಿಸಲು ಹದಿಮೂರು ವರ್ಷ
ಹಿಡಿಯಿತು. 2 ಅವನು ‘‘ಲೆಬನೋನಿನ ಅರಣ್ಯದ ಮನೆ’’
ಎಂಬ ಕಟ್ಟಡ ವನ್ನೂ ಕಟ್ಟಿಸಿದನು. ಅದರ ಉದ್ದ
ನೂರೈವತ್ತು ಅಡಿಗಳು: ಅಗಲ ಎಪ್ಪತ್ತೈದು ಅಡಿಗಳು;
ಎತ್ತರ ನಲವತ್ತೈದು ಅಡಿಗಳು. ಅದರಲ್ಲಿ ನಾಲ್ಕು ಸಾಲಿನ
ದೇವದಾರುಮರದ ಕಂಬಗ ಳಿದ್ದವು. ಆ ಕಂಬಗಳ ಮೇಲೆ
ದೇವದಾರುಮರದ ಬೋದಿಗೆಗಳಿದ್ದವು. 3 ಈ ಸಾಲು
ಕಂಬಗಳ ಮೇಲೆ ದೇವದಾರು ಮರದ ತೊಲೆಗಳನ್ನು
ಜೋಡಿಸಿದ್ದರು. ಈ ತೊಲೆ ಗಳ ಮೇಲ್ಭಾಗದ ಮಾಳಿಗೆಗೆ
ದೇವದಾರುಮರದ ಹಲಗೆಗಳನ್ನು ಹಾಸಿದ್ದರು. ಈ
ಕಂಬಗಳ ಪ್ರತಿಯೊಂದು ಸಾಲಿನಲ್ಲೂ ಹದಿನೈದು
ತೊಲೆಗಳಿದ್ದವು. ಅಲ್ಲಿ ಒಟ್ಟು ನಲವತ್ತೈದು ತೊಲೆ
ಗಳಿದ್ದುವು. 4 ಗೋಡೆಯ ಪ್ರತಿಯೊಂದು ಕಡೆಯಲ್ಲಿ
ಮೂರು ಸಾಲು ಕಿಟಕಿಗಳಿದ್ದವು. ಈ ಕಿಟಕಿಗಳು ಎದುರು
ಬದುರಾಗಿದ್ದವು.

5 ಗೋಡೆಯ ಪ್ರತಿಯೊಂದು ಕೊನೆಯಲ್ಲೂ ಮೂರು
ಬಾಗಿಲುಗಳಿದ್ದವು. ಎಲ್ಲ ಬಾಗಿಲುಗಳ ಚೌಕಟ್ಟುಗಳೂ
ಚತುಷ್ಕೋಣಾಕಾರವಾಗಿದ್ದವು.

6 ಸೊಲೊಮೋನನು, ‘‘ಕಂಬಮಂಟಪ’’ವನ್ನು ಸಹ
ಕಟ್ಟಿಸಿದನು. ಅದರ ಉದ್ದ ಎಪ್ಪತ್ತೈದು ಅಡಿ ಮತ್ತು ಅಗಲ
ನಲವತ್ತೈದು ಅಡಿ. ಅದರ ಮುಂಭಾಗದಲ್ಲೂ ಕಂಬಗ
ಳಿಂದ ಕೂಡಿದ ಪಡಸಾಲೆಯಿತ್ತು.

7 ಸೊಲೊಮೋನನು ಜನರಿಗೆ ತೀರ್ಪುನೀಡಲು
ಸಿಂಹಾಸನಮಂದಿರವನ್ನು ಕಟ್ಟಿಸಿದನು. ಅವನು ಇದನ್ನು,
‘‘ನ್ಯಾಯಮಂದಿರ’’ ಎಂದೂ ಕರೆದನು. ಈ ಕೋಣೆಗೆ
ನೆಲದಿಂದ ಮಾಳಿಗೆಯವರೆಗೆ ದೇವದಾರುಮರದ ಹಲಗೆ
ಗಳನ್ನು ಹೊದಿಸಲಾಗಿತ್ತು.

8 ಸೊಲೊಮೋನನು ವಾಸಿಸುತ್ತಿದ್ದ ಮನೆಯು ‘ನ್ಯಾಯ
ಮಂದಿರದ ಒಳಗಿನ ಪ್ರಾಕಾರದಲ್ಲಿತ್ತು. ಈ ಮನೆಯನ್ನು
‘‘ನ್ಯಾಯಮಂದಿರ’’ದಂತೆಯೇ ಕಟ್ಟಿಸಿದನು. ಇದಲ್ಲದೆ
ಅವನು ಈಜಿಪ್ಟಿನ ರಾಜನ ಮಗಳಾದ ತನ್ನ ಹೆಂಡತಿಗೂ
ಇದೇ ರೀತಿಯ ಮನೆಯನ್ನು ಕಟ್ಟಿಸಿದನು.

9 ಈ ಎಲ್ಲಾ ಕಟ್ಟಡಗಳನ್ನು ಶ್ರೇಷ್ಠವಾದ ಕಲ್ಲುಗಳಿಂದ
ಕಟ್ಟಿಸಿದನು. ಈ ಕಲ್ಲುಗಳನ್ನು ಸರಿಯಾದ ಅಳತೆಗೆ ಗರಗಸ
ದಿಂದ ಕತ್ತರಿಸಿದನು. ಅವುಗಳನ್ನು ಮುಂದುಗಡೆ ಮತ್ತು
ಹಿಂದುಗಡೆ ಸಮನಾಗಿ ಕತ್ತರಿಸಿದ್ದನು. ಶ್ರೇಷ್ಠವಾದ ಈ
ಕಲ್ಲುಗಳು ಅಡಿಪಾಯದಿಂದ ಗೋಡೆಯ ತುದಿಯವರೆಗೆ
ಇದ್ದವು. ಅಂಗಳದ ಸುತ್ತಲೂ ಇದ್ದ ಗೋಡೆಯನ್ನು ಸಹ
ಶ್ರೇಷ್ಠವಾದ ಕತ್ತರಿಸಿದ ಕಲ್ಲುಗಳಿಂದ ಕಟ್ಟಲಾಗಿತ್ತು.
10 ಅಡಿಪಾಯವನ್ನು ಅಗಲವಾದ ಮತ್ತು ಬೆಲೆಬಾಳುವ
ಕಲ್ಲುಗಳಿಂದ ಹಾಕಿದರು. ಕೆಲವು ಕಲ್ಲುಗಳು ಹದಿನೈದು
ಅಡಿ ಉದ್ದವಾಗಿದ್ದರೆ, ಉಳಿದವು ಹನ್ನೆರಡು ಅಡಿ
ಉದ್ದವಾಗಿದ್ದವು. 11 ಈ ಕಲ್ಲುಗಳ ಮೇಲಿನ ತುದಿಯಲ್ಲಿ
ಇತರ ಶ್ರೇಷ್ಠವಾದ ಕಲ್ಲುಗಳು ಮತ್ತು ದೇವದಾರುಮರದ
ತೊಲೆಗಳಿದ್ದವು. 12 ಅರಮನೆಯ ಅಂಗಳದ ದೇವಾಲ
ಯದ ಅಂಗಳದ ಮತ್ತು ದೇವಾಲಯದ ಮಂಟಪದ
ಸುತ್ತಲೂ ಗೋಡೆಗಳಿದ್ದವು. ಈ ಗೋಡೆಗಳನ್ನು ಮೂರು
ಸಾಲು ಕಲ್ಲುಗಳಿಂದ ಮತ್ತು ಒಂದು ಸಾಲು ದೇವದಾರು
ಮರಗಳಿಂದ ಕಟ್ಟಿಸಿದ್ದನು.

13 ರಾಜನಾದ ಸೊಲೊಮೋನನು ತೂರಿನಲ್ಲಿದ್ದ
ಹೀರಾಮ್ ಎಂಬವನಿಗೆ ಸಂದೇಶವನ್ನು ಕಳುಹಿಸಿ ಅವ
ನನ್ನು ಜೆರುಸಲೇಮಿಗೆ ಕರೆಸಿದನು. 14 ಹೀರಾಮನ
ತಾಯಿಯು ನಫ್ತಾಲಿ ಕುಲದವಳಾಗಿದ್ದಳು ಮತ್ತು ಇಸ್ರೇಲಿ
ನವಳಾಗಿದ್ದಳು. ಅವನ ದಿವಂಗತ ತಂದೆಯು ತೂರಿನವ
ನಾಗಿದ್ದನು. ಹೀರಾಮನು ಹಿತ್ತಾಳೆಯಿಂದ ವಸ್ತುಗಳನ್ನು
ತಯಾರಿಸುತ್ತಿದ್ದನು. ಅವನು ಕುಶಲ ಕರ್ಮಿಯೂ ಅನು
ಭವಿಯೂ ಆದ ಕೆಲಸಗಾರನಾಗಿದ್ದನು. ರಾಜನಾದ
ಸೊಲೊಮೋನನು ಹೀರಾಮನಿಗೆ ಬರಲು ಹೇಳಿದಾಗ,
ಅವನು ಒಪ್ಪಿಕೊಂಡನು. ರಾಜನಾದ ಸೊಲೊಮೋನನು
ಎಲ್ಲಾ ಹಿತ್ತಾಳೆಯ ಕಾರ್ಯಗಳಿಗೆ ಹೀರಾಮನನ್ನು
ಮೇಲ್ವಿಚಾರಕನನ್ನಾಗಿ ನೇಮಿಸಿದನು. ಹೀರಾಮನು
ಹಿತ್ತಾಳೆಯ ವಸ್ತುಗಳನ್ನು ನಿರ್ಮಿಸಿದನು.

15 ಹೀರಾಮನು ಎರಡು ಹಿತ್ತಾಳೆಯ ಕಂಬಗಳನ್ನು
ನಿರ್ಮಿಸಿದನು, ಪ್ರತಿಯೊಂದು ಕಂಬದ ಎತ್ತರ ಇಪ್ಪತ್ತೇಳು
ಅಡಿ; ಸುತ್ತಳತೆ ಹದಿನೆಂಟು ಅಡಿ. ಈ ಕಂಬಗಳು ಟೊಳ್ಳಾ
ಗಿದ್ದವು; ಲೋಹವು ಮೂರು ಇಂಚು ದಪ್ಪವಾಗಿತ್ತು.
16 ಹೀರಾಮನು ಏಳೂವರೆ ಅಡಿ ಉದ್ದದ ಎರಡು ಹಿತ್ತಾ
ಳೆಯ ಬೋದಿಗೆಗಳನ್ನು ಮಾಡಿದನು. ಹೀರಾಮನು ಈ
ಬೋದಿಗೆಗಳನ್ನು ಕಂಬಗಳ ಮೇಲಿಟ್ಟನು. 17 ನಂತರ
ಅವನು ಕಂಬಗಳ ಮೇಲಿನ ಈ ಬೋದಿಗೆಗಳಿಗೆ
ಸರಪಣಿಯ ಎರಡು ಜಾಲರಿಗಳನ್ನು ಮಾಡಿದನು.
18 ಇದಲ್ಲದೆ ಅವನು ತಾಮ್ರದ ದಾಳಿಂಬೆ ಹಣ್ಣುಗಳನ್ನು
ಮಾಡಿ ಅವುಗಳನ್ನು ಮಾಡಿದನು. ಈ ದಾಳಿಂಬೆಯ
ಅಲಂಕರಣಗಳನ್ನು ಕಂಬಗಳ ಮೇಲಿನ ಬೋದಿಗೆ
ಜಾಲರಿಯ ಸುತ್ತಲೂ ಎರಡೆರಡು ಸಾಲಾಗಿ ಸಿಕ್ಕಿಸಿದನು.
19 ಕಂಬಗಳ ಮೇಲಿದ್ದ ಏಳುವರೆ ಅಡಿ ಎತ್ತರದ ಈ
ಬೋದಿಗೆಗಳು ಹೂಗಳಂತೆ ಕಾಣುತ್ತಿದ್ದವು. 20 ಈ
ಬೋದಿಗೆಗಳು ಕಂಬಗಳ ಮೇಲಿನ ತುದಿಯಲ್ಲಿದ್ದವು.
ಅವು ವೃತ್ತಾಕಾರದ ಜಾಲರಿಯ ಮೇಲಿದ್ದವು. ಆ ಸ್ಥಳದಲ್ಲಿ
ಬೋದಿಗೆಯ ಸುತ್ತಲೂ ಇಪ್ಪತ್ತು ದಾಳಿಂಬೆ ಹಣ್ಣುಗಳ
ಸಾಲುಗಳಿದ್ದವು. 21 ಹೀರಾಮನು ಈ ಹಿತ್ತಾಳೆಯ

ಕಂಬಗಳನ್ನು ದೇವಾಲಯದ ಮಂಟಪದಲ್ಲಿ ಇಟ್ಟನು.
ಒಂದು ಸ್ತಂಭವನ್ನು ಪ್ರವೇಶದ್ವಾರದ ದಕ್ಷಿಣ ದಿಕ್ಕಿನ
ಕಡೆಯಲ್ಲೂ ಮತ್ತೊಂದನ್ನು ಉತ್ತರ ದಿಕ್ಕಿನ ಕಡೆಯಲ್ಲೂ
ಇಟ್ಟನು. ದಕ್ಷಿಣದ ಸ್ತಂಭಕ್ಕೆ ಯಾಕೀನ್ ಎಂದು ಹೆಸರಿ
ಟ್ಟನು. ಉತ್ತರದ ಸ್ತಂಭಕ್ಕೆ ಬೋವಜ್ ಎಂದು ಹೆಸರಿ
ಟ್ಟನು. 22 ಅವರು ಹೂ ಆಕಾರದ ಬೋದಿಗೆಗಳನ್ನು ಸ್ತಂಭ
ಗಳ ಮೇಲಿನ ತುದಿಯಲ್ಲಿಟ್ಟರು. ಆ ಎರಡು ಸ್ತಂಭಗಳ
ಕೆಲಸವು ಮುಗಿಯಿತು.

23 ನಂತರ ಹೀರಾಮನು ವೃತ್ತಾಕಾರದ ಹಿತ್ತಾಳೆಯ
ತೊಟ್ಟಿಯನ್ನು ಮಾಡಿದನು. ಅವರು ಈ ತೊಟ್ಟಿಯನ್ನು
‘‘ಸಮುದ್ರ’’ವೆಂದು ಕರೆದರು. ಆ ತೊಟ್ಟಿಯ ಸುತ್ತ
ಳತೆಯು ನಲವತ್ತೈದು ಅಡಿಗಳು. ಅದರ ಒಂದು ಅಂಚಿ
ನಿಂದ ಮತ್ತೊಂದು ಅಂಚಿಗೆ ಹದಿನೈದು ಅಡಿಗಳು ಮತ್ತು
ಆಳ ಏಳುವರೆ ಅಡಿಗಳು. 24 ಆ ತೊಟ್ಟಿಯ ಹೊರ ಅಂಚಿನ
ಸುತ್ತಲೂ ಒಂದು ಕಂಠವಿತ್ತು. ಈ ಕಂಠದ ಕೆಳಗಡೆಯಲ್ಲಿ
ತೊಟ್ಟಿಯನ್ನು ಸುತ್ತುವರಿದಂತೆ ಎರಡು ಸಾಲು ಹಿತ್ತಾಳೆಯ
ಬಳ್ಳಿಗಳಿದ್ದವು. ಈ ಹಿತ್ತಾಳೆಯ ಬಳ್ಳಿಗಳನ್ನು ತೊಟ್ಟಿಯ
ಮೇಲ್ಭಾಗದಲ್ಲಿ ಎರಕ ಹೊಯ್ದಿದ್ದನು. 25 ಈ ತೊಟ್ಟಿಯು
ಹನ್ನೆರಡು ಹಿತ್ತಾಳೆಯ ಹೋರಿಗಳ ಬೆನ್ನಿನ ಮೇಲಿತ್ತು.
ಈ ಹನ್ನೆರಡು ಹೋರಿಗಳೂ ತೊಟ್ಟಿಗೆ ದೂರವಾಗಿದ್ದ
ಹೊರಭಾಗವನ್ನು ನೋಡುತ್ತಿರುವಂತೆ ಕಾಣುತ್ತಿದ್ದವು.
ಮೂರು ಉತ್ತರದ ಕಡೆಗೂ ಮೂರು ಪೂರ್ವದ ಕಡೆಗೂ
ಮೂರು ದಕ್ಷಿಣದ ಕಡೆಗೂ ಮೂರು ಪಶ್ಚಿಮದ ಕಡೆಗೂ
ನೋಡುತ್ತಿದ್ದವು. 26 ಈ ತೊಟ್ಟಿಯ ಪಾರ್ಶ್ವಗಳು ಮೂರು
ಇಂಚು ದಪ್ಪನಾಗಿದ್ದವು. ಈ ತೊಟ್ಟಿಯ ಕಂಠವು
ಲೋಟದ ಕಂಠದಂತೆ ಅಥವಾ ಹೂಗಳ ದಳದಂತೆ ಇತ್ತು.
ಈ ತೊಟ್ಟಿಯಲ್ಲಿ ಹನ್ನೊಂದು ಸಾವಿರ ಗ್ಯಾಲನ್ ನೀರನ್ನು
ತುಂಬಬಹುದಾಗಿತ್ತು.

27 ಹೀರಾಮನು ಹತ್ತು ಬಂಡಿಗಳನ್ನು ಮಾಡಿದನು. ಪ್ರತಿ
ಯೊಂದರ ಉದ್ದ ಆರು ಅಡಿಗಳು; ಅಗಲ ಆರು ಅಡಿಗಳು;
ಮತ್ತು ಎತ್ತರ ನಾಲ್ಕುವರೆ ಅಡಿಗಳು. 28 ಈ ಬಂಡಿಗಳನ್ನು
ಚೌಕಾಕಾರದ ಚೌಕಟ್ಟಿನ ಅಂಕಣದಿಂದ ಮಾಡಿದ್ದನು.
29 ಅಂಕಣದ ಮತ್ತು ಚೌಕಟ್ಟಿನ ಮೇಲೆ ಹಿತ್ತಾಳೆಯ ಸಿಂಹ
ಗಳು, ಹೋರಿಗಳು ಮತ್ತು ಕೆರೂಬಿಗಳಿದ್ದವು. ಸಿಂಹಗಳ,
ಹೋರಿಗಳ ಮೇಲ್ಭಾಗದಲ್ಲಿ ಮತ್ತು ಕೆಳಭಾಗದಲ್ಲಿ ಹೂವಿ
ನಾಕಾರದಲ್ಲಿ ಹಿತ್ತಾಳೆಯ ಮೇಲೆ ಕೆತ್ತಿದ್ದನು. 30 ಪ್ರತಿ
ಯೊಂದು ಬಂಡಿಗೂ ನಾಲ್ಕು ಹಿತ್ತಾಳೆಯ ಗಾಲಿಗಳು
ಮತ್ತು ಅಚ್ಚುಗಳು ಇದ್ದವು. ಆ ದೊಡ್ಡ ಪಾತ್ರೆಯ ಮೂಲೆ
ಗಳಲ್ಲಿ ಹಿತ್ತಾಳೆಯ ಆಧಾರಕಂಬಗಳಿದ್ದವು. ಈ ಕಂಬಗಳ
ಹಿತ್ತಾಳೆಯ ಮೇಲ್ಭಾಗವು ಹೂವಿನಾಕಾರದಲ್ಲಿ ಕೆತ್ತಲಾ
ಗಿತ್ತು. 31 ಈ ಪಾತ್ರೆಯ ಮೇಲೆ ಒಂದು ಚೌಕಟ್ಟಿತ್ತು. ಅದು
ಪಾತ್ರೆಯ ಮೇಲೆ ಹದಿನೆಂಟು ಇಂಚು ಎತ್ತರವಾಗಿತ್ತು.
ಆ ಪಾತ್ರೆಯ ಬಾಯಿಯು ಇಪ್ಪತ್ತೇಳು ಇಂಚು ವ್ಯಾಸ
ದೊಂದಿಗೆ ವೃತ್ತಾಕಾರವಾಗಿತ್ತು. ಆ ಚೌಕಟ್ಟಿನ ಹಿತ್ತಾಳೆಯ
ಮೇಲೆ ಚಿತ್ರವಿನ್ಯಾಸಗಳನ್ನು ಬಿಡಿಸಲಾಗಿತ್ತು. ಈ
ಚೌಕಟ್ಟು ವೃತ್ತಾಕಾರವಾಗಿರದೆ ಚೌಕಾಕಾರವಾಗಿತ್ತು.
32 ಈ ಚೌಕಟ್ಟಿನ ಕೆಳಗಡೆ ನಾಲ್ಕು ಚಕ್ರಗಳಿದ್ದವು. ಈ
ಚಕ್ರಗಳ ವ್ಯಾಸವು ಇಪ್ಪತ್ತೇಳು ಇಂಚುಗಳು. ಈ ಚಕ್ರಗಳ
ಅಚ್ಚುಗಳನ್ನು ಬಂಡಿಯೊಂದಿಗೇ ಸೇರಿಸಿ ಅಖಂಡವಾಗಿ
ನಿರ್ಮಿಸಿದ್ದರು. 33 ಈ ಚಕ್ರಗಳು ರಥದ ಮೇಲಿನ ಚಕ್ರ
ಗಳಂತಿದ್ದುವು. ಈ ಚಕ್ರಗಳ ಮೇಲಿನ ಅಚ್ಚುಗಳನ್ನು,
ಕಂಠಗಳನ್ನು, ಅರೆಯಕಾಲುಗಳನ್ನು ಮತ್ತು ಕಂಬಗಳನ್ನು
ಹಿತ್ತಾಳೆಯಿಂದ ಮಾಡಿದ್ದರು.

34 ಪ್ರತಿ ಬಂಡಿಯ ನಾಲ್ಕು ಮೂಲೆಗಳಲ್ಲಿ ನಾಲ್ಕು
ಆಧಾರಕಂಬಗಳಿದ್ದವು. ಅವುಗಳನ್ನು ಬಂಡಿಯೊಂದಿಗೆ
ಅಖಂಡವಾಗಿ ನಿರ್ಮಿಸಿದ್ದರು. 35 ಪ್ರತಿಯೊಂದು
ಬಂಡಿಯ ಮೇಲ್ಗಡೆ ಸುತ್ತಲೂ ಒಂದು ಹಿತ್ತಾಳೆಯ
ಪಟ್ಟಿಯಿತ್ತು. ಅದನ್ನು ಬಂಡಿಯೊಂದಿಗೆ ಅಖಂಡವಾಗಿ
ಮಾಡಿದ್ದರು.

36 ಬಂಡಿಯ ಪಾರ್ಶ್ವಗಳ ಮೇಲೆ ಮತ್ತು ಚೌಕಟ್ಟುಗಳ
ಮೇಲೆ ಕೆರೂಬಿಗಳ, ಸಿಂಹಗಳ, ಖರ್ಜೂರ ಗಿಡಗಳ
ಚಿತ್ರಗಳನ್ನು ಹಿತ್ತಾಳೆಯಲ್ಲಿ ಕೆತ್ತಿದ್ದರು. ಈ ಚಿತ್ರಗಳನ್ನು
ಬಂಡಿಯಲ್ಲಿ ಅವಕಾಶವಿದ್ದ ಭಾಗಗಳಲ್ಲೆಲ್ಲಾ ಕೆತ್ತಿದ್ದರು.
ಬಂಡಿಯ ಸುತ್ತಲಿನ ಚೌಕಟ್ಟಿನ ಮೇಲೆ ಹೂಗಳನ್ನು
ಕೆತ್ತಿದ್ದರು.

37 ಹೀರಾಮನು ಹತ್ತು ಬಂಡಿ ಗಳನ್ನು ಮಾಡಿದನು.
ಅವುಗಳೆಲ್ಲ ಒಂದೇ ತೆರನಾಗಿದ್ದವು. ಪ್ರತಿಯೊಂದನ್ನು
ಹಿತ್ತಾಳೆಯಿಂದ ಮಾಡಿದ್ದನು. ಹಿತ್ತಾಳೆಯನ್ನು ಕರಗಿಸಿ,
ಅಚ್ಚಿನಲ್ಲಿ ಎರಕಹೊಯ್ದಿದ್ದನು. ಆದುದರಿಂದ ಬಂಡಿಗಳ
ಗಾತ್ರ ಮತ್ತು ಆಕಾರವು ಒಂದೇ ಆಗಿತ್ತು.

38 ಹೀರಾಮನು ಹತ್ತು ಗಂಗಾಳಗಳನ್ನು ಮಾಡಿದನು.
ಹತ್ತು ಬಂಡಿಗಳಲ್ಲಿ ಒಂದೊಂದು ಬಂಡಿಗೆ ಒಂದೊಂದು
ಗಂಗಾಳವಿತ್ತು. ಪ್ರತಿಯೊಂದು ಗಂಗಾಳದ ಅಗಲವು ಆರು
ಅಡಿಗಳು. ಪ್ರತಿ ಗಂಗಾಳವು ಇನ್ನೂರ ಮೂವತ್ತು
ಗ್ಯಾಲನ್ ನೀರನ್ನು ಹಿಡಿಯುತ್ತಿತ್ತು. 39 ಹೀರಾಮನು
ದೇವಾಲಯದ ದಕ್ಷಿಣದ ಕಡೆಗೆ ಐದು ಬಂಡಿಗಳನ್ನು
ಮತ್ತು ಇತರ ಐದು ಬಂಡಿಗಳನ್ನು ಉತ್ತರದ ಕಡೆಗೆ
ಇಟ್ಟನು. ಅವನು ಆ ದೊಡ್ಡ ಜಲಾಶಯವನ್ನು ದೇವಾ
ಲಯದ ಆಗ್ನೇಯ ದಿಕ್ಕಿನಲ್ಲಿ ಇಟ್ಟನು. 40 ಹೀರಾಮನು
ಗುಂಬಗಳನ್ನು, ಚಿಕ್ಕ ಸಲಿಕೆಗಳನ್ನು ಮತ್ತು ಚಿಕ್ಕ
ಗಂಗಾಳಗಳನ್ನು ಮಾಡಿದನು. ರಾಜನಾದ ಸೊಲೊಮೋ
ನನು ಅಪೇಕ್ಷಿಸಿದ್ದ ವಸ್ತುಗಳನ್ನೆಲ್ಲ ಹೀರಾಮನು ಮಾಡಿ
ಮುಗಿಸಿದನು. ಯೆಹೋವನ ದೇವಾಲಯಕ್ಕಾಗಿ ಹೀರಾ
ಮನು ಮಾಡಿದ ವಸ್ತುಗಳ ಪಟ್ಟಿ ಹೀಗಿದೆ:

41 ಎರಡು ಸ್ತಂಭಗಳು; ಈ ಸ್ತಂಭಗಳ ಮೇಲೆ ಮಡಕೆಯ ಆಕಾರದ ಎರಡು ಬೋದಿಗೆಗಳು; ಬೋದಿಗೆಯ ಸುತ್ತಲೂ ಹಬ್ಬಿದಂತಿರುವ ಎರಡು ಜಾಲರಿಗಳು;
42 ಎರಡು ಜಾಲರಿಗಳನ್ನೂ ನಾನೂರು ದಾಳಿಂಬೆ ಹಣ್ಣುಗಳು ಅಂದರೆ ಕಂಬಗಳ ಮೇಲಿರುವ ಎರಡು ಪಾತ್ರೆಗಳನ್ನು ಮುಚ್ಚುವಂತೆ ಪ್ರತಿಯೊಂದು ಜಾಲರಿಗೂ ಎರಡೆರಡು ಸಾಲು ದಾಳಿಂಬೆ ಹಣ್ಣುಗಳು;
43 ಒಂದೊಂದು ಗಂಗಾಳವನ್ನು ಒಳಗೊಂಡ ಹತ್ತು ಬಂಡಿಗಳು;
44 ಹನ್ನೆರಡು ಹೋರಿಗಳು ಹೊತ್ತುಕೊಂಡಿರುವ ಒಂದು ಜಲಾಶಯ.
45 ಗುಂಬಗಳು, ಚಿಕ್ಕಸಲಿಕೆಗಳು, ಚಿಕ್ಕಗಂಗಾಳಗಳು ಮತ್ತು ಯೆಹೋವನ ಆಲಯಕ್ಕೆ ಅಗತ್ಯವಾದ ಎಲ್ಲಾ ಪಾತ್ರೆಗಳು.

ರಾಜನಾದ ಸೊಲೊಮೋನನು ಅಪೇಕ್ಷಿಸಿದ ವಸ್ತುಗಳ
ನ್ನೆಲ್ಲಾ ಹೀರಾಮನು ಮಾಡಿದನು. ಈ ವಸ್ತುಗಳನ್ನೆಲ್ಲಾ
ನಯಗೊಳಿಸಿದ ಹಿತ್ತಾಳೆಯಿಂದ ಮಾಡಿದನು. 46-47ಈ
ವಸ್ತುಗಳನ್ನು ಮಾಡಲು ಉಪಯೋಗಿಸಿದ ಹಿತ್ತಾಳೆಯನ್ನು
ಸೊಲೊಮೋನನು ತೂಕಹಾಕಲೇ ಇಲ್ಲ. ಯಾಕೆಂದರೆ
ತೂಕ ಮಾಡಲಾಗದಷ್ಟು ವಸ್ತುಗಳು ಅಲ್ಲಿದ್ದವು. ಆದುದ
ರಿಂದ ಹಿತ್ತಾಳೆಯ ಒಟ್ಟು ತೂಕವು ತಿಳಿಯಲೇ ಇಲ್ಲ. ಈ
ವಸ್ತುಗಳನ್ನು ಸುಕ್ಕೋತ್ ಮತ್ತು ಚಾರೇತಾನ್‌ಗಳ
ನಡುವೆ ಜೋರ್ಡನ್ ನದಿಯ ಹತ್ತಿರ ತಯಾರಿಸಲು
ರಾಜನು ಆಜ್ಞಾಪಿಸಿದನು. ಅವರು ಹಿತ್ತಾಳೆಯನ್ನು
ಕರಗಿಸಿ, ಅದನ್ನು ಮಣ್ಣಿನ ನೆಲದ ಅಚ್ಚುಗಳಲ್ಲಿ ಸುರಿದು
ಈ ವಸ್ತುಗಳನ್ನು ಮಾಡಿದರು.
48-50ದೇವಾಲಯಕ್ಕಾಗಿ ಅನೇಕ ವಸ್ತುಗಳನ್ನು ಬಂಗಾರ
ದಿಂದ ಮಾಡಲು ಸೊಲೊಮೋನನು ಆಜ್ಞಾಪಿಸಿದನು.
ದೇವಾಲಯಕ್ಕಾಗಿ ಸೊಲೊಮೋನನು ಬಂಗಾರದಿಂದ
ಮಾಡಿಸಿದ ವಸ್ತುಗಳು ಹೀಗಿವೆ: ಬಂಗಾರದ ಯಜ್ಞ
ವೇದಿಕೆ; ಬಂಗಾರದ ಮೇಜು (ದೇವರಿಗೆ ವಿಶೇಷ ರೊಟ್ಟಿ
ಯನ್ನು ಈ ಮೇಜಿನ ಮೇಲೆ ಅರ್ಪಿಸುತ್ತಾರೆ);

ಅಪ್ಪಟ ಬಂಗಾರದ ದೀಪಸ್ತಂಭಗಳು (ಮಹಾ ಪವಿತ್ರಸ್ಥಳದ ಎದುರಿನಲ್ಲಿ ದಕ್ಷಿಣದ ಕಡೆಗೆ ಐದು ಮತ್ತು ಉತ್ತರದ ಕಡೆಗೆ ಐದು.) ಬಂಗಾರದ ಹೂಗಳು, ಹಣತೆಗಳು ಮತ್ತು ಇಕ್ಕುಳಗಳು; ಅಪ್ಪಟ ಬಂಗಾರದ ಬಟ್ಟಲುಗಳು; ದೀಪಗಳನ್ನು ಪ್ರಕಾಶಮಾನವಾಗಿ ಮಾಡಲು ಉಪಯೋಗಿಸುವ ಉಪಕರಣಗಳು; ಚಿಕ್ಕ ಗಂಗಾಳಗಳು; ಚಪ್ಪಡಿಯಾದ ಲೋಹದಿಂದ ಮಾಡಿದ ಪಾತ್ರೆಗಳು; ಬೂದಿಯನ್ನು ತೆಗೆದುಕೊಂಡು ಹೋಗಲು ಶುದ್ಧ ಬಂಗಾರದ ಪಾತ್ರೆಗಳು; ದೇವಾಲಯದ ಪ್ರವೇಶ ದ್ವಾರದ ಬಾಗಿಲುಗಳು.

51ಯೆಹೋವನ ದೇವಾಲಯಕ್ಕಾಗಿ ರಾಜನಾದ
ಸೊಲೊಮೋನನು ಮಾಡಬೇಕೆಂದಿದ್ದ ಕಾರ್ಯವನ್ನು
ಮುಗಿಸಿದನು. ಈ ವಿಶೇಷ ಕಾರ್ಯಕ್ಕಾಗಿ ತನ್ನ ತಂದೆ
ಯಾದ ದಾವೀದನು ಮೀಸಲಾಗಿಟ್ಟಿದ್ದ ವಸ್ತುಗಳನ್ನೆಲ್ಲ
ರಾಜನಾದ ಸೊಲೊಮೋನನು ಪಡೆದುಕೊಂಡು ದೇವಾ
ಲಯದೊಳಕ್ಕೆ ತಂದನು. ಅವನು ಬೆಳ್ಳಿಬಂಗಾರಗಳನ್ನು
ಯೆಹೋವನ ದೇವಾಲಯದ ಭಂಡಾರಕ್ಕೆ ಸೇರಿಸಿದನು.

## ದೇವಾಲಯದಲ್ಲಿ ಒಡಂಬಡಿಕೆಯ ಪೆಟ್ಟಿಗೆ

8 ರಾಜನಾದ ಸೊಲೊಮೋನನು ಇಸ್ರೇಲಿನ ಹಿರಿಯ
ರೆಲ್ಲರಿಗೆ, ಕುಲಗಳ ಮುಖ್ಯಸ್ಥರಿಗೆ ಮತ್ತು ಇಸ್ರೇಲಿನ
ಕುಟುಂಬ ಪ್ರಧಾನರಿಗೆ ಜೆರುಸಲೇಮಿನಲ್ಲಿದ್ದ ತನ್ನ ಬಳಿಗೆ
ಬರಬೇಕೆಂದು ತಿಳಿಸಿದನು. ಒಡಂಬಡಿಕೆಯ ಪೆಟ್ಟಿಗೆ
ಯನ್ನು ದಾವೀದನಗರದಿಂದ ಆಲಯಕ್ಕೆ ತರುವಾಗ
ಅವರು ಸಹ ತನ್ನೊಂದಿಗಿರಬೇಕೆಂಬುದು ಸೊಲೊಮೋ
ನನ ಅಪೇಕ್ಷೆಯಾಗಿತ್ತು. 2ಆದುದರಿಂದ ಇಸ್ರೇಲಿನ ಜನ
ರೆಲ್ಲರೂ ರಾಜನಾದ ಸೊಲೊಮೋನನ ಬಳಿಗೆ ಒಟ್ಟಾಗಿ
ಬಂದರು. ಇದು ಆಶ್ವೀಜ ಮಾಸದ ವಿಶೇಷ ದಿನದಂದು
(ಪರ್ಣಶಾಲೆಗಳ ಹಬ್ಬ) ನಡೆಯಿತು. ಇದು ವರ್ಷದ
ಏಳನೆಯ ತಿಂಗಳು.
3ಇಸ್ರೇಲಿನ ಹಿರಿಯರೆಲ್ಲರು ಆ ಸ್ಥಳದಲ್ಲಿ ಒಟ್ಟು
ಗೂಡಿದರು. ನಂತರ ಯಾಜಕರು ಪವಿತ್ರ ಪೆಟ್ಟಿಗೆಯನ್ನು
ತೆಗೆದುಕೊಂಡರು. 4ಅವರು ಯೆಹೋವನ ಪವಿತ್ರ ಪೆಟ್ಟಿಗೆ
ಯನ್ನು, ಅದರೊಂದಿಗೆ ದೇವದರ್ಶನ ಗುಡಾರವನ್ನು
ಮತ್ತು ಗುಡಾರದಲ್ಲಿದ್ದ ಪವಿತ್ರ ವಸ್ತುಗಳನ್ನು ಹೊತ್ತು
ಕೊಂಡರು. ಈ ವಸ್ತುಗಳನ್ನು ಯಾಜಕರು ಹೊತ್ತು
ಕೊಳ್ಳಲು ಲೇವಿಯರು ಅವರಿಗೆ ಸಹಾಯ ಮಾಡಿದರು.
5ರಾಜನಾದ ಸೊಲೊಮೋನನು ಮತ್ತು ಇಸ್ರೇಲಿನ
ಜನರೆಲ್ಲರೂ ಒಡಂಬಡಿಕೆಯ ಪೆಟ್ಟಿಗೆಯ ಎದುರಿನಲ್ಲಿ
ಒಟ್ಟಿಗೆ ಸೇರಿದರು. ಅವರು ಅಸಂಖ್ಯವಾದ ಕುರಿಗಳನ್ನು
ಮತ್ತು ದನಗಳನ್ನು ಯಜ್ಞಗಳನ್ನಾಗಿ ಅರ್ಪಿಸಿದರು. 6ಆಗ
ಯಾಜಕರು ಯೆಹೋವನ ಪವಿತ್ರ ಪೆಟ್ಟಿಗೆಯನ್ನು ಅದರ
ಸರಿಯಾದ ಸ್ಥಳದಲ್ಲಿ ಇಟ್ಟರು. ಇದು ಆಲಯದ ಮಹಾ
ಪವಿತ್ರಸ್ಥಳವಾಗಿತ್ತು. ಒಡಂಬಡಿಕೆಯ ಪೆಟ್ಟಿಗೆಯನ್ನು
ಕೆರೂಬಿಗಳ ರೆಕ್ಕೆಗಳ ಅಡಿಯಲ್ಲಿ ಇಟ್ಟರು. 7ಕೆರೂಬಿಗಳ
ರೆಕ್ಕೆಗಳು ಪವಿತ್ರ ಪೆಟ್ಟಿಗೆಯ ಮೇಲೆಲ್ಲಾ ಹರಡಿಕೊಂಡಿ
ದ್ದವು. ಅವು ಪವಿತ್ರ ಪೆಟ್ಟಿಗೆಯನ್ನು ಮತ್ತು ಅದನ್ನು
ಹೊರುವ ಕೋಲುಗಳನ್ನು ಮುಚ್ಚಿದವು. 8ಈ ಹೊರುವ
ಕೋಲುಗಳು ಬಹಳ ಉದ್ದವಾಗಿದ್ದವು. ಮಹಾಪವಿತ್ರ

ಸ್ಥಳದ ಎದುರಿನ ಪವಿತ್ರ ಸ್ಥಳದಲ್ಲಿ ನಿಂತುಕೊಳ್ಳುವ ಯಾವ
ವ್ಯಕ್ತಿಯೇ ಆಗಲಿ ಈ ಕೋಲುಗಳ ತುದಿಯನ್ನು ಕಾಣ
ಬಹುದಾಗಿತ್ತು. ಆದರೆ ಹೊರಗಿರುವ ಯಾರೂ ಅವು
ಗಳನ್ನು ನೋಡುವುದಕ್ಕಾಗುವುದಿಲ್ಲ. ಈ ಕೋಲುಗಳು
ಇಂದಿಗೂ ಅಲ್ಲಿವೆ. 9ಪವಿತ್ರ ಪೆಟ್ಟಿಗೆಯಲ್ಲಿರುವ ಒಂದೇ
ವಸ್ತುವೆಂದರೆ ಎರಡು ಕಲ್ಲಿನ ಹಲಿಗೆಗಳು. ಮೋಶೆಯು
ಹೋರೇಬ್ ಎಂಬ ಸ್ಥಳದಲ್ಲಿ ಪವಿತ್ರ ಪೆಟ್ಟಿಗೆಯಲ್ಲಿಟ್ಟ
ಎರಡು ಕಲ್ಲಿನ ಹಲಗೆಗಳೇ. ಇವು ಈಜಿಪ್ಟಿನಿಂದ
ಹೊರಬಂದ ಇಸ್ರೇಲಿನ ಜನರೊಂದಿಗೆ ಯೆಹೋವನು
ಒಪ್ಪಂದ ಮಾಡಿಕೊಂಡ ಸ್ಥಳವೇ ಹೋರೇಬ್.

10ಯಾಜಕರು ಪವಿತ್ರಪೆಟ್ಟಿಗೆಯನ್ನು ಮಹಾಪವಿತ್ರ ಸ್ಥಳ
ದಲ್ಲಿ ಇಟ್ಟರು. ಯಾಜಕರು ಪವಿತ್ರಸ್ಥಳದಿಂದ ಹೊರ
ಬಂದಾಗ, ಯೆಹೋವನ ಆಲಯವು ಮೋಡದಿಂದ
ತುಂಬಿಕೊಂಡಿತು. 11ಯೆಹೋವನ ತೇಜಸ್ಸು ಆಲಯ
ವನ್ನು ತುಂಬಿಕೊಂಡಿದ್ದರಿಂದ ಯಾಜಕರು ತಮ್ಮ
ಕಾರ್ಯವನ್ನು ಮುಂದುವರಿಸಲಾಗಲಿಲ್ಲ. 12ಆಗ
ಸೊಲೊಮೋನನು,

‘‘ಆಕಾಶದಲ್ಲಿ ಸೂರ್ಯನು ಹೊಳೆಯುವಂತೆ
ಯೆಹೋವನು ಮಾಡಿದನು, ತಾನಾದರೊ ಕಪ್ಪಾದ
ಮೋಡದಲ್ಲಿ ವಾಸಿಸಲು ನಿರ್ಧರಿಸಿದನು.*
13 ನಿಜವಾಗಿಯೂ ಅತ್ಯದ್ಭುತವಾದ ಆಲಯವನ್ನು
ನಿನಗಾಗಿ ನಿರ್ಮಿಸಿರುವೆನು. ಈ ಸ್ಥಳದಲ್ಲಿ ನೀನು
ಶಾಶ್ವತವಾಗಿ ನೆಲೆಸಿರಬಹುದು’’ ಎಂದು
ಹೇಳಿದನು.

14ಇಸ್ರೇಲಿನ ಜನರೆಲ್ಲರೂ ಅಲ್ಲಿ ನಿಂತಿದ್ದರು. ರಾಜ
ನಾದ ಸೊಲೊಮೋನನು ಅವರ ಕಡೆಗೆ ತಿರುಗಿ, ಅವರನ್ನು
ಆಶೀರ್ವದಿಸಲು ದೇವರನ್ನು ಬೇಡಿದನು.

15ನಂತರ ರಾಜನಾದ ಸೊಲೊಮೋನನು ಯೆಹೋವ
ನಿಗೆ ದೀರ್ಘ ಪ್ರಾರ್ಥನೆಯನ್ನು ಮಾಡಿದನು. ಅವನ
ಪ್ರಾರ್ಥನೆ ಇಂತಿದೆ:

‘‘ಇಸ್ರೇಲಿನ ದೇವರಾದ ಯೆಹೋವನು ಮಹತ್ವ
ಪೂರ್ಣನಾಗಿದ್ದಾನೆ. ಯೆಹೋವನು ನನ್ನ ತಂದೆ
ಯಾದ ದಾವೀದನಿಗೆ ತಾನು ಮಾಡಿದ್ದ ವಾಗ್ದಾನ
ಗಳನ್ನು ಸ್ವತಃ ತಾನೇ ನೆರವೇರಿಸಿದ್ದಾನೆ.
ಯೆಹೋವನು ನನ್ನ ತಂದೆಗೆ,
16 ‘ನಾನು ನನ್ನ ಜನರಾದ ಇಸ್ರೇಲರನ್ನು ಈಜಿಪ್ಟಿ
ನಿಂದ ಹೊರತಂದೆನು. ಆದರೆ ನನ್ನನ್ನು ಘನಪಡಿಸಿ
ಕೊಳ್ಳುವುದಕ್ಕಾಗಿ ಆಲಯವೊಂದನ್ನು ಕಟ್ಟಲು
ಇಸ್ರೇಲಿನ ಕುಲಗಳಿಂದ ನಾನಿನ್ನೂ ಯಾವ ನಗರ
ವನ್ನು ಆರಿಸಿಕೊಂಡಿರಲಿಲ್ಲ. ಇಸ್ರೇಲಿನ ಜನರ
ನ್ನಾಳುವ ನಾಯಕನನ್ನು ನಾನಿನ್ನೂ ಆರಿಸಿಕೊಂಡಿರ
ಲಿಲ್ಲ, ಆದರೆ ನಾನೀಗ ಜೆರುಸಲೇಮನ್ನು ನನಗೆ
ಸನ್ಮಾನವನ್ನು ತರುವಂಥ ಸ್ಥಳವನ್ನಾಗಿ ಆರಿಸಿ
ಕೊಂಡಿರುವೆ. ಇಸ್ರೇಲಿನ ನನ್ನ ಜನರನ್ನು ಆಳಲು
ದಾವೀದನನ್ನು ನಾನು ಆರಿಸಿಕೊಂಡಿರುವೆ’ ಎಂದು
ಹೇಳಿದ್ದನು.

17‘‘ನನ್ನ ತಂದೆಯಾದ ದಾವೀದನು ಇಸ್ರೇಲಿನ ದೇವ
ರಾದ ಯೆಹೋವನ ಮಹಿಮೆಗಾಗಿ ಒಂದು ಆಲಯವನ್ನು
ನಿರ್ಮಿಸಲು ಬಹಳ ಅಪೇಕ್ಷಿಸಿದ್ದನು. 18ಆದರೆ ಯೆಹೋ
ವನು ನನ್ನ ತಂದೆಗೆ, ‘‘ನೀನು ನನ್ನ ಮಹಿಮೆಗಾಗಿ
ಆಲಯವೊಂದನ್ನು ನಿರ್ಮಿಸಲು ಬಹಳ ಅಪೇಕ್ಷೆಪಟ್ಟಿರು
ವುದು ನನಗೆ ತಿಳಿದಿದೆ. ನನಗೋಸ್ಕರ ಆಲಯವನ್ನು
ಕಟ್ಟಲು ನೀನು ಅಪೇಕ್ಷಿಸಿರುವುದು ಒಳ್ಳೆಯದೇ ಆಗಿದೆ.
19 ಆದರೆ ನನ್ನ ಆಲಯವನ್ನು ನಿರ್ಮಿಸಲು ನಾನು ಆರಿಸಿ
ಕೊಂಡಿರುವ ವ್ಯಕ್ತಿಯು ನೀನಲ್ಲ. ನಿನ್ನ ಮಗನೇ ನನ್ನ
ಆಲಯವನ್ನು ನಿರ್ಮಿಸುತ್ತಾನೆ’ ಎಂದು ಹೇಳಿದನು.

20‘‘ಯೆಹೋವನು ತಾನು ಮಾಡಿದ್ದ ವಾಗ್ದಾನವನ್ನು
ಈಡೇರಿಸಿದನು. ನನ್ನ ತಂದೆಯಾದ ದಾವೀದನ ಸ್ಥಾನ
ದಲ್ಲಿ ನಾನೀಗ ರಾಜನಾಗಿದ್ದೇನೆ. ಯೆಹೋವನ ವಾಗ್ದಾನ
ದಂತೆ ಈಗ ನಾನು ಇಸ್ರೇಲಿನ ಜನರನ್ನು ಆಳುತ್ತಿದ್ದೇನೆ.
ಇಸ್ರೇಲಿನ ದೇವರಾದ ಯೆಹೋವನಿಗೆ ನಾನು ಆಲಯ
ವನ್ನು ನಿರ್ಮಿಸಿದೆನು. 21ಯೆಹೋವನ ಪೆಟ್ಟಿಗೆಗಾಗಿ
ಆಲಯದಲ್ಲಿ ನಾನೊಂದು ಸ್ಥಳವನ್ನು ಮಾಡಿದ್ದೇನೆ.
ಯೆಹೋವನು ನಮ್ಮ ಪೂರ್ವಿಕರೊಂದಿಗೆ ಮಾಡಿಕೊಂಡಿ
ರುವ ಒಡಂಬಡಿಕೆಯು ಈ ಪವಿತ್ರ ಪೆಟ್ಟಿಗೆಯಲ್ಲಿದೆ.
ಯೆಹೋವನು ನಮ್ಮ ಪೂರ್ವಿಕರನ್ನು ಈಜಿಪ್ಟಿನಿಂದ
ಹೊರತಂದಾಗ ಈ ಒಡಂಬಡಿಕೆಯನ್ನು ಮಾಡಿ
ಕೊಂಡನು’’ ಎಂದು ಹೇಳಿದನು.

22ಬಳಿಕ ಸೊಲೊಮೋನನು ಯೆಹೋವನ ಯಜ್ಞ
ವೇದಿಕೆಯ ಎದುರಿನಲ್ಲಿ ನಿಂತುಕೊಂಡನು. ಜನರೆಲ್ಲರೂ
ಅವನ ಎದುರಿನಲ್ಲಿ ನಿಂತುಕೊಂಡಿದ್ದರು. ರಾಜನಾದ
ಸೊಲೊಮೋನನು ತನ್ನ ಕೈಗಳನ್ನು ಚಾಚಿ, ಆಕಾಶದ ಕಡೆಗೆ
ದೃಷ್ಟಿಸಿ,

23‘‘ಇಸ್ರೇಲಿನ ದೇವರಾದ ಯೆಹೋವನೇ, ಭೂಲೋ
ಕದಲ್ಲಾಗಲೀ ಆಕಾಶಮಂಡಲದಲ್ಲಾಗಲೀ ನಿನ್ನಂತಹ
ದೇವರು ಮತ್ತೊಬ್ಬರಿಲ್ಲ. ನೀನು ಜನರನ್ನು

**ಆಕಾಶದಲ್ಲಿ ...ನಿರ್ಧರಿಸಿದನು** ಇದು ಪುರಾತನ ಪ್ರತಿಯೊಂದರಲ್ಲಿ ಬರೆಯಲ್ಪಟ್ಟಿದೆ. ಆದರೆ ಹೀಬ್ರೂವಿನ ಪ್ರತಿಯೊಂದರಲ್ಲಿ, ‘‘ಯೆಹೋವನೇ, ಕಾರ್ಗತ್ತಲೆಯಲ್ಲಿ ವಾಸಿಸುತ್ತೇನೆ ಎಂದು ಹೇಳಿರುವೆ’’ ಎಂದಿದೆ.

ಪ್ರೀತಿಸುವುದರಿಂದ ಅವರೊಂದಿಗೆ ಒಡಂಬಡಿಕೆ ಮಾಡಿ
ಕೊಂಡೆ. ನೀನು ನಿನ್ನ ಒಡಂಬಡಿಕೆಗಳನ್ನು ನೆರವೇರಿಸುವೆ.
ನಿನ್ನನ್ನು ಅನುಸರಿಸುವ ಜನರಿಗೆ ನೀನು ದಯಾಳು
ವಾಗಿರುವೆ ಮತ್ತು ನಂಬಿಗಸ್ತನಾಗಿರುವೆ. 24ನಿನ್ನ
ಸೇವಕನೂ ನನ್ನ ತಂದೆಯೂ ಆದ ದಾವೀದನಿಗೆ
ನೀನೊಂದು ವಾಗ್ದಾನ ಮಾಡಿದ್ದೆ. ನೀನು ಆ ವಾಗ್ದಾನ
ವನ್ನು ನೆರವೇರಿಸಿದೆ. ನಿನ್ನ ಬಾಯಿಂದಲೇ ನೀನು ಆ
ವಾಗ್ದಾನವನ್ನು ಮಾಡಿದೆ. ನೀನು ನಿನ್ನ ಮಹಾಶಕ್ತಿಯಿಂದ
ಆ ವಾಗ್ದಾನವನ್ನು ಇಂದು ನೆರವೇರುವಂತೆ ಮಾಡಿದೆ.
25ಈಗಲಾದರೋ ಇಸ್ರೇಲಿನ ದೇವರಾದ ಯೆಹೋ
ವನೇ, ನಿನ್ನ ಸೇವಕನೂ ನನ್ನ ತಂದೆಯೂ ಆದ
ದಾವೀದನಿಗೆ ನೀನು ಮಾಡಿದ ಇತರ ವಾಗ್ದಾನ
ಗಳನ್ನು ಈಗ ನೆರವೇರಿಸು. ನೀನು ನನ್ನ ತಂದೆಗೆ,
‘ದಾವೀದನೇ, ನೀನು ನನ್ನನ್ನು ಅನುಸರಿಸಿದಂತೆ ನಿನ್ನ
ಮಕ್ಕಳೂ ಎಚ್ಚರಿಕೆಯಿಂದ ನನ್ನನ್ನು ಅನುಸರಿಸಿದರೆ, ನಿನ್ನ
ಕುಟುಂಬದಲ್ಲಿನ ಯಾವನಾದರೊಬ್ಬನು ಇಸ್ರೇಲಿನ
ಜನರನ್ನು ಆಳುತ್ತಲೇ ಇರುವನು’ ಎಂದು ಹೇಳಿದೆ.
26ಇಸ್ರೇಲಿನ ದೇವರಾದ ಯೆಹೋವನೇ, ನನ್ನ ತಂದೆಗೆ
ನೀಡಿದ ಆ ವಾಗ್ದಾನವನ್ನು ನೆರವೇರಿಸೆಂದು ನಾನು ನಿನ್ನಲ್ಲಿ
ಮತ್ತೆ ಬೇಡಿಕೊಳ್ಳುತ್ತೇನೆ.

27“ದೇವರೇ, ನೀನು ನಿಜವಾಗಿಯೂ ನಮ್ಮೊಡನೆ
ಭೂಲೋಕದಲ್ಲಿ ವಾಸಿಸುವೆಯಾ? ಆಕಾಶವೆಲ್ಲವೂ
ಮತ್ತು ಉನ್ನತೋನ್ನತವಾದ ಪರಲೋಕವೂ ನಿನ್ನನ್ನು
ಹಿಡಿಸಲಾರವು. ಹೀಗಿರಲು, ನಾನು ನಿನಗಾಗಿ ನಿರ್ಮಿಸಿ
ರುವ ಈ ಆಲಯವು ನಿನ್ನ ವಾಸಕ್ಕೆ ಖಂಡಿತವಾಗಿಯೂ
ಸಾಲುವುದಿಲ್ಲ. 28ಆದರೆ ದಯವಿಟ್ಟು ನನ್ನ ಪ್ರಾರ್ಥನೆ
ಯನ್ನು ಮತ್ತು ಮನವಿಯನ್ನು ಕೇಳು. ನಾನು ನಿನ್ನ ಸೇವಕ.
ಯೆಹೋವನೇ, ನೀನೇ ನನ್ನ ದೇವರು. ಇಂದು ನಿನಗೆ
ನಾನು ಮಾಡುತ್ತಿರುವ ಈ ಪ್ರಾರ್ಥನೆಯನ್ನು ಲಾಲಿಸು.
29‘ಅಲ್ಲಿ ನಾನು ಸನ್ಮಾನಿಸಲ್ಪಡುವೆನು’ ಎಂದು ನೀನು
ಬಹುಕಾಲದ ಹಿಂದೆ ಹೇಳಿರುವೆ. ಆದುದರಿಂದ ಈ
ಆಲಯವನ್ನು ಹಗಲಿರುಳೂ ದೃಷ್ಟಿಸು. ನಾನು ಈ
ಆಲಯದಲ್ಲಿ ನಿನಗೆ ಮಾಡುವ ಪ್ರಾರ್ಥನೆಯನ್ನು ದಯ
ವಿಟ್ಟು ಕೇಳು. 30ಯೆಹೋವನೇ, ನಾನು ಮತ್ತು ಇಸ್ರೇಲಿನ
ಜನರೆಲ್ಲರೂ ಈ ಸ್ಥಳದ ಕಡೆಗೆ ತಿರುಗಿ, ನಿನ್ನಲ್ಲಿ
ಪ್ರಾರ್ಥಿಸುತ್ತೇವೆ. ದಯವಿಟ್ಟು ಆ ಪ್ರಾರ್ಥನೆಗಳನ್ನು
ಲಾಲಿಸು. ನೀನು ಪರಲೋಕಲ್ಲಿ ವಾಸಿಸುತ್ತಿರುವಿಯೆಂದು
ನಮಗೆ ಗೊತ್ತಿದೆ. ನೀನು ನಮ್ಮ ಪ್ರಾರ್ಥನೆಗಳನ್ನು
ಅಲ್ಲಿಯೇ ಕೇಳಿ, ನಮಗೆ ಕ್ಷಮೆಯನ್ನು ಅನುಗ್ರಹಿಸು.

31“ಒಬ್ಬ ವ್ಯಕ್ತಿಯು ಇನ್ನೊಬ್ಬ ವ್ಯಕ್ತಿಯ ವಿರುದ್ಧ
ಏನಾದರೂ ಕೆಟ್ಟದ್ದನ್ನು ಮಾಡಿದರೆ, ಅವನನ್ನು ಈ
ಯಜ್ಞವೇದಿಕೆಯ ಬಳಿಗೆ ಕರೆದು ತರುತ್ತಾರೆ. ಆ ವ್ಯಕ್ತಿಯು
ತಪ್ಪಿತಸ್ಥನಲ್ಲದಿದ್ದರೆ, ಅವನು ಬಂದು ತಾನು ನಿರಪರಾಧಿ
ಯೆಂದು ಪ್ರಮಾಣ ಮಾಡುತ್ತಾನೆ. 32ಪರಲೋಕದ
ಲ್ಲಿರುವ ನೀನು ಅದನ್ನು ಕೇಳಿ, ಆ ವ್ಯಕ್ತಿಗೆ ತೀರ್ಪು ನೀಡು.
ಆ ವ್ಯಕ್ತಿಯು ತಪ್ಪಿತಸ್ಥನಾಗಿದ್ದರೆ, ಅವನು ತಪ್ಪಿತಸ್ಥ
ನೆಂಬುದನ್ನು ನಮಗೆ ತೋರಿಸು. ಅವನು ನಿರಪರಾಧಿ
ಯಾಗಿದ್ದರೆ ಅವನು ತಪ್ಪಿತಸ್ಥನಲ್ಲವೆಂಬುದನ್ನೂ ದಯ
ವಿಟ್ಟು ನಮಗೆ ತೋರಿಸು.

33“ಇಸ್ರೇಲಿನ ನಿನ್ನ ಜನರೂ ಕೆಲವು ಸಂದರ್ಭಗಳಲ್ಲಿ
ನಿನ್ನ ವಿರುದ್ಧವಾಗಿ ಪಾಪಮಾಡುತ್ತಾರೆ. ಅವರನ್ನು ಅವರ
ಶತ್ರುಗಳು ಸೋಲಿಸುತ್ತಾರೆ. ಆಗ ಜನರು ನಿನ್ನ ಹತ್ತಿರಕ್ಕೆ
ಹಿಂದಿರುಗಿ ನಿನ್ನನ್ನು ಸ್ತುತಿಸುತ್ತಾರೆ. ಈ ಆಲಯದಲ್ಲಿ
ಜನರು ನಿನಗೆ ಪ್ರಾರ್ಥಿಸುತ್ತಾರೆ. 34ಪರಲೋಕದಲ್ಲಿಯೇ
ಅವರ ಪ್ರಾರ್ಥನೆಗಳನ್ನು ಆಲಿಸಿ ನಿನ್ನ ಜನರಾದ ಇಸ್ರೇಲರ
ಪಾಪಗಳನ್ನು ಕ್ಷಮಿಸಿ ಅವರ ದೇಶದಲ್ಲಿ ಅವರು ಮತ್ತೆ
ನೆಲೆಸಲು ಅವಕಾಶ ಮಾಡಿಕೊಡು. ಈ ದೇಶವನ್ನು ಅವರ
ಪೂರ್ವಿಕರಿಗೆ ದಯಪಾಲಿಸಿದವನು ನೀನೇ.

35“ಅವರು ಕೆಲವು ಸಂದರ್ಭಗಳಲ್ಲಿ ನಿನ್ನ ವಿರುದ್ಧವಾಗಿ
ಪಾಪಮಾಡುತ್ತಾರೆ. ಆಗ ನೀನು ಅವರ ಭೂಮಿಯ
ಮೇಲೆ ಬೀಳುವ ಮಳೆಯನ್ನು ನಿಲ್ಲಿಸುವೆ. ಆಗ ಅವರು
ಈ ಸ್ಥಳದ ಕಡೆಗೆ ತಿರುಗಿ ಪ್ರಾರ್ಥಿಸುತ್ತಾ, ನಿನ್ನ ಹೆಸರನ್ನು
ಕೊಂಡಾಡುವರು. ನೀನು ಅವರನ್ನು ಬಳಲಿಸುವೆ. ಅವರು
ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ಅವುಗಳಿಗೆ
ವಿಮುಖರಾಗುತ್ತಾರೆ. 36ಆಗ ಪರಲೋಕದಿಂದಲೇ
ಅವರ ಪ್ರಾರ್ಥನೆಗಳನ್ನು ಆಲಿಸು; ಅವರ ಪಾಪಗಳನ್ನು
ಕ್ಷಮಿಸು; ನೀತಿಮಾರ್ಗವನ್ನು ಅವರಿಗೆ ಕಲಿಸು. ಬಳಿಕ
ನೀನು ಅವರಿಗೆ ದಯಪಾಲಿಸಿದ ಭೂಮಿಯ ಮೇಲೆ
ಮಳೆಯನ್ನು ಸುರಿಸು.

37“ಭೂಮಿಯು ಬಹಳ ಬರಡಾಗಿ ಅದರ ಮೇಲೆ
ಬೆಳೆಗಳೇ ಬೆಳೆಯದಂತಾಗಬಹುದು, ಬಹುಶಃ ಘೋರ
ವಾದ ವ್ಯಾಧಿಗಳು ಜನರಲ್ಲಿ ಹರಡಬಹುದು. ಬೆಳೆಯುವ
ಬೆಳೆಗಳೆಲ್ಲ ಬಹುಶಃ ಕ್ರಿಮಿಕೀಟಗಳಿಂದ ನಾಶವಾಗ
ಬಹುದು. ಇಲ್ಲವೆ ನಿನ್ನ ಜನರ ಮೇಲೆ ಕೆಲವು ನಗರಗಳಲ್ಲಿ
ಅವರ ಶತ್ರುಗಳು ಆಕ್ರಮಣ ಮಾಡಬಹುದು. ನಿನ್ನ
ಜನರಲ್ಲಿ ಅನೇಕರು ವ್ಯಾಧಿಗೆ ಒಳಗಾಗಬಹುದು. 38“ಈ
ಕಾರ್ಯಗಳಲ್ಲಿ ಯಾವುದಾದರೊಂದು ಸಂಭವಿಸಿದಾಗ,
ಒಬ್ಬ ಮನುಷ್ಯನು ಮಾತ್ರ ತನ್ನ ಪಾಪಕ್ಕಾಗಿ ಕ್ಷಮೆಯನ್ನು
ಯಾಚಿಸಿ ಈ ಆಲಯದ ಕಡೆಗೆ ಕೈಗಳನ್ನೆತ್ತಿ ಪ್ರಾರ್ಥಿಸಿದರೆ,
39ದಯವಿಟ್ಟು ಅವನ ಪ್ರಾರ್ಥನೆಯನ್ನು ನಿನ್ನ ನಿವಾಸ
ವಾದ ಪರಲೋಕದಿಂದ ಆಲಿಸಿ, ಜನರನ್ನು ಕ್ಷಮಿಸಿ, ಅವ
ರಿಗೆ ಸಹಾಯ ಮಾಡು. ಜನರು ನಿಜವಾಗಿ ಆಲೋಚಿಸುವ
ಸಂಗತಿಗಳು ನಿನಗೆ ಮಾತ್ರ ತಿಳಿದಿವೆ. ಆದುದರಿಂದ
ಪ್ರತಿಯೊಬ್ಬ ವ್ಯಕ್ತಿಗೂ ತೀರ್ಪುನೀಡು ಮತ್ತು ಅವನಿಗೆ

ನ್ಯಾಯವಾದದ್ದನ್ನು ಮಾಡು. [40]“ನೀನು ಹೀಗೆ ಮಾಡಿ
ದರೆ, ನೀನು ನಮ್ಮ ಪೂರ್ವಿಕರಿಗೆ ದಯಪಾಲಿಸಿರುವ ಈ
ದೇಶದಲ್ಲಿ ಅವರು ವಾಸಿಸುವ ಎಲ್ಲಾ ಕಾಲದಲ್ಲೂ ನಿನ್ನಲ್ಲಿ
ಭಯ ಭಕ್ತಿಯುಳ್ಳವರಾಗಿರುತ್ತಾರೆ.

[41-42]“ನಿನ್ನ ನಾಮ ಮಹತ್ತನ್ನು ಮತ್ತು ಶಕ್ತಿಯನ್ನು
ಇತರ ಸ್ಥಳಗಳ ಜನರು ಕೇಳುತ್ತಾರೆ. ಈ ಆಲಯದಲ್ಲಿ
ಪ್ರಾರ್ಥಿಸುವುದಕ್ಕಾಗಿ ಅವರು ದೂರದಿಂದ ಬರುತ್ತಾರೆ.
[43]ನಿನ್ನ ನಿವಾಸವಾದ ಪರಲೋಕದಿಂದಲೇ ಅವರ
ಪ್ರಾರ್ಥನೆಗಳನ್ನು ದಯವಿಟ್ಟು ಆಲಿಸು, ಅನ್ಯ ಸ್ಥಳದವ
ರಾದ ಆ ಜನರು ನಿನ್ನಲ್ಲಿ ಬೇಡುವುದನ್ನೆಲ್ಲ ದಯವಿಟ್ಟು
ಈಡೇರಿಸು. ಆಗ, ಇಸ್ರೇಲಿನ ಜನರಂತೆ ಭೂಲೋಕದ
ವರೆಲ್ಲರಿಗೂ ನಿನ್ನ ಹೆಸರು ಗೊತ್ತಾಗುವುದು ಮತ್ತು
ಅವರು ನಿನಗೆ ಭಯಪಡುವರು. ಈ ಆಲಯವನ್ನು ನಿನ್ನ
ಗೌರವಕ್ಕಾಗಿ ನಾನು ಕಟ್ಟಿಸಿದೆನೆಂಬುದು ಆಗ ಎಲ್ಲಾ
ಕಡೆಯ ಜನರಿಗೂ ತಿಳಿಯುವುದು.

[44]“ಕೆಲವು ಸಂದರ್ಭಗಳಲ್ಲಿ ತಮ್ಮ ಶತ್ರುಗಳ ವಿರುದ್ಧ
ಹೋರಾಡುವಂತೆ ನಿನ್ನ ಜನರಿಗೆ ನೀನು ಆಜ್ಞಾಪಿಸುವೆ.
ಆಗ ನಿನ್ನ ಜನರು, ನಿನ್ನಿಂದ ಆರಿಸಲ್ಪಟ್ಟ ಈ ನಗರದ ಕಡೆಗೆ
ಮತ್ತು ನಾನು ನಿನ್ನ ಗೌರವಕ್ಕಾಗಿ ನಿರ್ಮಿಸಿದ ಈ ದೇವಾಲ
ಯದ ಕಡೆಗೆ ಮುಖಮಾಡಿ ನಿನ್ನಲ್ಲಿ ಪ್ರಾರ್ಥಿಸುತ್ತಾರೆ,
[45]ಆಗ ಪರಲೋಕದಿಂದಲೇ ನೀನು ಅವರ ಪ್ರಾರ್ಥನೆ
ಗಳನ್ನು ಆಲಿಸಿ ಅವರಿಗೆ ಸಹಾಯ ಮಾಡು.

[46]“ನಿನ್ನ ಜನರು ನಿನ್ನ ವಿರುದ್ಧ ಪಾಪವನ್ನು ಮಾಡು
ತ್ತಾರೆ. ಪ್ರತಿಯೊಬ್ಬ ವ್ಯಕ್ತಿಯೂ ಪಾಪಮಾಡುತ್ತಾ
ನೆಂಬುದು ನನಗೆ ತಿಳಿದಿದೆ. ನಿನ್ನ ಜನರ ಬಗ್ಗೆ ನೀನು
ಕೋಪದಿಂದಿರುವೆ. ಅವರ ಶತ್ರುಗಳು ಅವರನ್ನು
ಸೋಲಿಸುವಂತೆ ಮಾಡುವೆ. ಅವರ ಶತ್ರುಗಳು ಅವರನ್ನು
ಸೆರೆಯಾಳುಗಳನ್ನಾಗಿ ಕೆಲವು ದೂರ ದೇಶಗಳಿಗೆ ಸಾಗಿಸು
ವರು. [47]ಆ ದೂರದೇಶಗಳಲ್ಲಿ ನಿನ್ನ ಜನರು ತಮಗೆ
ಸಂಭವಿಸಿದ್ದನ್ನು ಆಲೋಚಿಸುತ್ತಾರೆ. ಅವರು ತಮ್ಮ
ಪಾಪಗಳಿಗಾಗಿ ಕ್ಷಮೆಯನ್ನು ಕೋರಿ, ನಿನ್ನಲ್ಲಿ ಪ್ರಾರ್ಥಿಸು
ತ್ತಾರೆ. ಅವರು, ‘ನಾವು ಪಾಪವನ್ನು, ಕೆಟ್ಟದ್ದನ್ನು ಮಾಡಿ
ದ್ದೇವೆ’ ಎಂದು ಹೇಳುತ್ತಾರೆ. [48]ಅವರು ದೂರದ ಆ
ದೇಶದಲ್ಲಿರುತ್ತಾರೆ. ಆದರೆ ಅವರು ತಮ್ಮ ಪೂರ್ವಿಕರಿಗೆ
ನೀನು ದಯಪಾಲಿಸಿದ ಈ ದೇಶದ ಕಡೆಗೂ ನಿನ್ನಿಂದ
ಆರಿಸಲ್ಪಟ್ಟ ಈ ನಗರದ ಕಡೆಗೂ ನಿನ್ನ ಗೌರವಕ್ಕಾಗಿ
ನಾನು ನಿರ್ಮಿಸಿದ ಈ ಆಲಯದ ಕಡೆಗೂ ತಿರುಗಿ
ಕೊಂಡು ನಿನ್ನಲ್ಲಿ ಪ್ರಾರ್ಥಿಸುವುದಾದರೆ, [49] ನಿನ್ನ ನಿವಾಸ
ವಾದ ಪರಲೋಕದಿಂದಲೇ ದಯವಿಟ್ಟು ಅವರ ಮೊರೆ
ಯನ್ನು ಆಲಿಸು. [50]ನಿನ್ನ ಜನರ ಎಲ್ಲ ಪಾಪಗಳನ್ನು
ಕ್ಷಮಿಸು. ಅವರು ನಿನಗೆ ವಿರುದ್ಧವಾದುದಕ್ಕೆ ಅವರನ್ನು
ಕ್ಷಮಿಸು. ಅವರ ಶತ್ರುಗಳು ಅವರಿಗೆ ದಯೆತೋರಿಸುವಂತೆ
ಮಾಡು. [51]ಅವರು ನಿನ್ನ ಜನರೆಂಬುದನ್ನು ಜ್ಞಾಪಿಸಿಕೊ.
ನೀನು ಅವರನ್ನು ಈಜಿಪ್ಟಿನಿಂದ ಬರಮಾಡಿದೆಯೆಂಬು
ದನ್ನು ಜ್ಞಾಪಿಸಿಕೊ. ಸುಡುವ ಕುಲುಮೆಯಿಂದ ಹೊರಕ್ಕೆ
ಎಳೆದು ತಂದಂತೆ ನೀನು ಅವರನ್ನು ರಕ್ಷಿಸಿದೆ.

[52]ದೇವರಾದ ಯೆಹೋವನೇ, ನನ್ನ ಪ್ರಾರ್ಥನೆಗಳನ್ನು
ಮತ್ತು ಇಸ್ರೇಲಿನ ನಿನ್ನ ಜನರ ಪ್ರಾರ್ಥನೆಗಳನ್ನು ದಯ
ವಿಟ್ಟು ಆಲಿಸು. ಅವರು ಸಹಾಯಕ್ಕಾಗಿ ಯಾವ ಘಳಿಗೆ
ಯಲ್ಲಾದರೂ ನಿನಗೆ ಮೊರೆಯಿಟ್ಟರೆ ಅದನ್ನು ಆಲಿಸು,
[53]ಭೂಲೋಕದ ಜನರೆಲ್ಲರಿಂದ ಅವರನ್ನು ನೀನು ನಿನ್ನ
ವಿಶೇಷವಾದ ಸ್ವಂತ ಜನರೆಂದು ಆರಿಸಿರುವೆ.
ಯೆಹೋವನೇ, ನಮ್ಮ ಪೂರ್ವಿಕರನ್ನು ನೀನು ಈಜಿಪ್ಟಿ
ನಿಂದ ಬರಮಾಡಿದಾಗ ನಿನ್ನ ಸೇವಕನಾದ ಮೋಶೆಯ
ಮೂಲಕ ಅದನ್ನು ವಾಗ್ದಾನ ಮಾಡಿದೆ.”

[54]ಸೊಲೊಮೋನನು ಯಜ್ಞವೇದಿಕೆಯ ಸನ್ನಿಧಿಯಲ್ಲಿ
ತನ್ನ ಮೊಣಕಾಲುಗಳನ್ನೂರಿ, ದೇವರಿಗೆ ಪ್ರಾರ್ಥನೆ
ಯನ್ನು ಮಾಡಿದನು. ಸೊಲೊಮೋನನು ತನ್ನ ಕೈಗಳನ್ನು
ಪರಲೋಕದತ್ತ ಚಾಚಿ ಪ್ರಾರ್ಥಿಸಿದನು. ಬಳಿಕ ಸೊಲೊ
ಮೋನನು ಪ್ರಾರ್ಥನೆಯನ್ನು ಮುಗಿಸಿ ಎದ್ದು ನಿಂತನು.
[55]ಬಳಿಕ ಇಸ್ರೇಲಿನ ಜನರೆಲ್ಲರನ್ನು ಆಶೀರ್ವದಿಸ
ಬೇಕೆಂದು ಅವನು ಗಟ್ಟಿಯಾದ ಧ್ವನಿಯಲ್ಲಿ ದೇವರನ್ನು
ಕೇಳಿಕೊಂಡನು. ಸೊಲೊಮೋನನು ಹೀಗೆ ಹೇಳಿದನು:

[56]“ಯೆಹೋವನಿಗೆ ಸ್ತೋತ್ರ ಮಾಡಿರಿ! ಆತನು
ಇಸ್ರೇಲಿನ ತನ್ನ ಜನರಿಗೆ ವಿಶ್ರಾಂತಿಯನ್ನು ಕೊಡುವುದಾಗಿ
ವಾಗ್ದಾನ ಮಾಡಿದ್ದಾನೆ. ಆತನು ನಮಗೆ ವಿಶ್ರಾಂತಿಯನ್ನು
ದಯಪಾಲಿಸಿರುವನು! ಯೆಹೋವನು ತನ್ನ ಸೇವಕನಾದ
ಮೋಶೆಯಿಂದ, ಇಸ್ರೇಲಿನ ಜನರಿಗೆ ಅನೇಕ ಒಳ್ಳೆಯ
ವಾಗ್ದಾನಗಳನ್ನು ಮಾಡಿದ್ದಾನೆ. ಯೆಹೋವನು ತನ್ನ
ವಾಗ್ದಾನಗಳನ್ನೆಲ್ಲ ಈಡೇರಿಸಿರುವನು. [57]ನಮ್ಮ ದೇವ
ರಾದ ಯೆಹೋವನು ನಮ್ಮೊಂದಿಗಿರಲೆಂದು ನಾನು
ಮೊರೆಯಿಡುತ್ತೇನೆ. ಆತನು ನಮ್ಮ ಪೂರ್ವಿಕರ ಜೊತೆ
ಯಲ್ಲಿದ್ದಂತೆ ನಮ್ಮ ಜೊತೆಯಲ್ಲಿಯೂ ಇರಲೆಂದು ನಾನು
ಮೊರೆಯಿಡುತ್ತೇನೆ. ಆತನು ನಮ್ಮನ್ನು ಎಂದಿಗೂ ಬಿಟ್ಟು
ಹೋಗಕೂಡದೆಂದು ನಾನು ಪ್ರಾರ್ಥಿಸುತ್ತೇನೆ. [58]ಈ
ರೀತಿಯಲ್ಲಿ ನಾವು ಆತನ ಕಡೆಗೆ ತಿರುಗಿ, ಆತನನ್ನು ಅನು
ಸರಿಸುವಂತೆ ಆತನು ಮಾಡಲಿ. ಆತನು ನಮ್ಮ ಪೂರ್ವಿಕ
ರಿಗೆ ನೀಡಿದ ಎಲ್ಲ ಕಟ್ಟಳೆಗಳಿಗೆ, ತೀರ್ಪುಗಳಿಗೆ ಮತ್ತು
ಆಜ್ಞೆಗಳಿಗೆ ವಿಧೇಯರಾಗಿಲು ಆಗ ನಮಗೆ ಸಾಧ್ಯ
ವಾಗುತ್ತದೆ. [59]ನನ್ನ ಈ ಪ್ರಾರ್ಥನೆಯನ್ನು ಮತ್ತು ನಾನು
ಕೇಳಿಕೊಂಡವುಗಳನ್ನು ನಮ್ಮ ದೇವರಾದ ಯೆಹೋವನು
ಸದಾ ಜ್ಞಾಪಿಸಿಕೊಳ್ಳಲಿ. ಯೆಹೋವನು ತನ್ನ ಸೇವಕನಾದ
ರಾಜನಿಗೋಸ್ಕರವಾಗಿಯೂ ತನ್ನ ಜನರಾದ ಇಸ್ರೇಲರಿ
ಗೋಸ್ಕರವಾಗಿಯೂ ಇವುಗಳನ್ನು ಈ ಹೊತ್ತೇ

ನೆರವೇರಿಸಲಿ. [60]ಆಗ ಯೆಹೋವನೇ ನಿಜವಾದ ದೇವ
ರೆಂದು ಪ್ರಪಂಚದ ಜನರೆಲ್ಲರಿಗೂ ತಿಳಿಯುತ್ತದೆ.
[61]ನಮ್ಮ ದೇವರಾದ ಯೆಹೋವನಿಗೆ ನೀವು ಪೂರ್ಣ
ಭಯ ಭಕ್ತಿಯುಳ್ಳವರಾಗಿದ್ದು ಆತನ ಕಟ್ಟಳೆಗಳನ್ನೂ ಆಜ್ಞೆ
ಗಳನ್ನೂ ಸದಾ ಅನುಸರಿಸಿರಿ; ಅವುಗಳಿಗೆ ವಿಧೇಯ
ರಾಗಿರಿ. ಈಗ ನೀವು ವಿಧೇಯರಾಗಿರುವಂತೆಯೇ ಇನ್ನು
ಮುಂದೆಯೂ ಆತನಿಗೆ ವಿಧೇಯರಾಗಿರಿ''ಎಂದನು.

[62]ಬಳಿಕ ರಾಜನಾದ ಸೊಲೊಮೋನನೂ ಇಸ್ರೇಲಿನ
ಜನರೆಲ್ಲರೂ ಯೆಹೋವನಿಗೆ ಯಜ್ಞಗಳನ್ನು ಸಮರ್ಪಿಸಿ
ದರು. [63]ಸೊಲೊಮೋನನು ಇಪ್ಪತ್ತೆರಡು ಸಾವಿರ
ಹೋರಿಗಳನ್ನು, ಒಂದು ಲಕ್ಷದ ಇಪ್ಪತ್ತು ಸಾವಿರ ಕುರಿ
ಗಳನ್ನು ಸಮಾಧಾನಯಜ್ಞವನ್ನಾಗಿ ಅರ್ಪಿಸಿದನು. ಹೀಗೆ
ರಾಜನು ಮತ್ತು ಇಸ್ರೇಲರು ಆಲಯವನ್ನು ಯೆಹೋವ
ನಿಗೆ ಪ್ರತಿಷ್ಠಿಸಿದರು.

[64]ಅಂದು ರಾಜನಾದ ಸೊಲೊಮೋನನು ಆಲಯದ
ಮುಂದಿನ ಅಂಗಳವನ್ನು ಪ್ರತಿಷ್ಠಿಸಿದನು. ಅವನು
ಸರ್ವಾಂಗ ಹೋಮಗಳನ್ನು, ಧಾನ್ಯ ಸಮರ್ಪಣೆಗಳನ್ನು
ಮತ್ತು ಸಮಾಧಾನಯಜ್ಞಕ್ಕಾಗಿ ವಧಿಸಿದ್ದ ಪಶುಗಳ
ಕೊಬ್ಬನ್ನು ಅಂಗಳದಲ್ಲಿ ಅರ್ಪಿಸಿದನು. ಯಾಕೆಂದರೆ
ಯೆಹೋವನ ಮುಂದೆ ಇದ್ದ ಹಿತ್ತಾಳೆಯ ಯಜ್ಞವೇದಿ
ಕೆಯು ಈ ಎಲ್ಲವನ್ನು ಹಿಡಿಸಲಾರದಷ್ಟು ಚಿಕ್ಕದಾಗಿತ್ತು.

[65]ರಾಜನಾದ ಸೊಲೊಮೋನನು ಮತ್ತು ಇಸ್ರೇಲಿನ
ಜನರೆಲ್ಲರು ವಿಶ್ರಾಂತಿ ಹಬ್ಬವನ್ನು * ಆಚರಿಸಿದರು.
ಉತ್ತರದಲ್ಲಿದ್ದ ಹಮಾತ್ ದಾರಿಯಿಂದ ದಕ್ಷಿಣದ
ಈಜಿಪ್ಟಿನ ಗಡಿಯವರೆಗಿನ ಎಲ್ಲ ಇಸ್ರೇಲರು ಅಲ್ಲಿದ್ದರು.
ಅವರೆಲ್ಲರೂ ಒಟ್ಟಾಗಿ ಏಳು ದಿನಗಳ ಕಾಲ ಯೆಹೋವನ
ಮುಂದೆ ತಿಂದು, ಕುಡಿದು ಆನಂದಿಸಿದರು.ಆಗ ಅವರು
ಮತ್ತೆ ಏಳು ದಿನಗಳು ಅಲ್ಲಿಯೇ ಉಳಿದರು. ಅವರು
ಒಟ್ಟಿಗೆ ಹದಿನಾಲ್ಕು ದಿನಗಳು ಹಬ್ಬವನ್ನು ಆಚರಿಸಿದರು!
[66]ಮಾರನೆಯ ದಿನ ಸೊಲೊಮೋನನು ಜನರಿಗೆ ಮನೆಗೆ
ಹೋಗುವಂತೆ ಹೇಳಿದನು. ಜನರೆಲ್ಲರು ರಾಜನನ್ನು
ಅಭಿನಂದಿಸಿ ತಮ್ಮ ಮನೆಗಳಿಗೆ ಹೋದರು. ಯೆಹೋ
ವನು ತನ್ನ ಸೇವಕನಾದ ದಾವೀದನಿಗೆ ಮತ್ತು ಇಸ್ರೇಲಿನ
ಜನರಿಗೆ ಒಳ್ಳೆಯವುಗಳನ್ನು ಮಾಡಿದ್ದರಿಂದ ಅವರು
ಸಂತೋಷವಾಗಿದ್ದರು.

### ಸೊಲೊಮೋನನಿಗೆ ದೇವದರ್ಶನ

9 ಸೊಲೊಮೋನನು ಯೆಹೋವನ ಆಲಯವನ್ನು
ಮತ್ತು ತನ್ನ ಅರಮನೆಯನ್ನು ಕಟ್ಟಿ ಮುಗಿಸಿದನು.
ಸೊಲೊಮೋನನು ತಾನು ಕಟ್ಟಬೇಕೆಂದು ಅಪೇಕ್ಷಿಸಿದ
ಎಲ್ಲವನ್ನು ಕಟ್ಟಿ ಮುಗಿಸಿದನು. [2]ಆಗ ಯೆಹೋವನು
ಸೊಲೊಮೋನನಿಗೆ, ಈ ಮುಂಚೆ ಗಿಬ್ಯೋನ್ ಪಟ್ಟಣ
ದಲ್ಲಿ ಪ್ರತ್ಯಕ್ಷನಾದಂತೆ ಮತ್ತೆ ಪ್ರತ್ಯಕ್ಷನಾದನು.
[3]ಯೆಹೋವನು ಅವನಿಗೆ ಹೀಗೆ ಹೇಳಿದನು: ''ನಿನ್ನ
ಪ್ರಾರ್ಥನೆಯು ನನಗೆ ಕೇಳಿಸಿತು. ನಿನ್ನ ಬಿನ್ನಹಗಳನ್ನು
ಆಲಿಸಿದೆನು. ಈ ಆಲಯವನ್ನು ನೀನು ಕಟ್ಟಿಸಿದೆ. ನಾನು
ಅದನ್ನು ಪವಿತ್ರಸ್ಥಳವನ್ನಾಗಿ ಮಾಡಿದೆ. ಆದುದ ರಿಂದ
ನಾನಿಲ್ಲಿ ಸದಾಕಾಲ ಸನ್ಮಾನಿಸಲ್ಪಡುವೆನು. ನನ್ನ
ದೃಷ್ಟಿಯೂ ಮನಸ್ಸೂ ಸದಾ ಅದರ ಮೇಲಿರುತ್ತದೆ. [4]ನಿನ್ನ
ತಂದೆಯಾದ ದಾವೀದನು ಸೇವೆಮಾಡಿದಂತೆ ನೀನೂ ನನ್ನ
ಸೇವೆ ಮಾಡಬೇಕು, ಅವನು ನ್ಯಾಯವಂತನಾಗಿದ್ದನು
ಮತ್ತು ಯಥಾರ್ಥವಂತನಾಗಿದ್ದನು; ನೀನು ನನ್ನ
ನಿಯಮಗಳಿಗೆ ವಿಧೇಯನಾಗಿರಬೇಕು ಮತ್ತು ನಾನು
ನಿನಗೆ ಆಜ್ಞಾಪಿಸಿದವುಗಳನ್ನೆಲ್ಲ ಮಾಡಬೇಕು.

[5]''ನೀನು ಅವುಗಳೆನ್ನೆಲ್ಲಾ ಕೈಕೊಂಡು ನಡೆದರೆ
ಯಾವಾಗಲೂ ನಿನ್ನ ಕುಟುಂಬದ ಯಾವನಾದರೊಬ್ಬನು
ಇಸ್ರೇಲಿನ ರಾಜನಾಗಿರುತ್ತಾನೆಂದು ನಾನು ನಿನಗೆ
ವಾಗ್ದಾನ ಮಾಡುತ್ತೇನೆ. ನಿನ್ನ ತಂದೆಯಾದ ದಾವೀದನಿಗೆ
ನಾನು ಈ ವಾಗ್ದಾನವನ್ನು ಮಾಡಿದ್ದೆನು. ಯಾವಾಗಲೂ
ಅವನ ಸಂತತಿಯವರಲ್ಲಿ ಯಾವನಾದರೊಬ್ಬನು ಇಸ್ರೇ
ಲನ್ನು ಆಳುತ್ತಾನೆಂದು ನಾನು ಅವನಿಗೆ ಹೇಳಿದ್ದೆನು.
[6-7]''ಆದರೆ ನೀನಾಗಲೀ ನಿನ್ನ ಮಕ್ಕಳಾಗಲೀ ನನ್ನನ್ನು
ಅನುಸರಿಸುವುದನ್ನು ನಿಲ್ಲಿಸಿದರೆ, ನನ್ನ ಕಟ್ಟಳೆಗಳನ್ನೂ
ಆಜ್ಞೆಗಳನ್ನೂ ನೀನು ಆನುಸರಿಸದಿದ್ದರೆ, ಅನ್ಯ ದೇವರು
ಗಳ ಸೇವೆಯನ್ನಾಗಲೀ ಪೂಜೆಯನ್ನಾಗಲೀ ನೀನು ಮಾಡಿ
ದರೆ, ನಾನು ದಯಪಾಲಿಸಿರುವ ದೇಶವನ್ನು ಬಿಟ್ಟು
ಹೋಗುವಂತೆ ನಾನು ಇಸ್ರೇಲರನ್ನು ಬಲಾತ್ಕರಿಸುತ್ತೇನೆ.
ಅನ್ಯಜನರಿಗೆ ಇಸ್ರೇಲರು ಉದಾಹರಣೆಯಾಗುತ್ತಾರೆ.
ಅನ್ಯಜನರು ಇಸ್ರೇಲರನ್ನು ಅಪಹಾಸ್ಯ ಮಾಡುತ್ತಾರೆ.
ನಾನು ಈ ಆಲಯವನ್ನು ಪವಿತ್ರವನ್ನಾಗಿಸಿದೆ. ಜನರು
ನನ್ನನ್ನು ಗೌರವಿಸುವ ಸ್ಥಳ ಅದಾಗಿದೆ. ಆದರೆ ನೀನು
ನನ್ನನ್ನು ಅನುಸರಿಸದೆ ಇದ್ದರೆ, ಆಗ ನಾನದನ್ನು ಧೂಳಿ
ೀಪಟ ಮಾಡುತ್ತೇನೆ. [8]ಈ ಆಲಯವನ್ನು ನಾಶ
ಗೊಳಿಸುತ್ತೇನೆ. ಇದನ್ನು ನೋಡುವ ಪ್ರತಿಯೊಬ್ಬರೂ
ವಿಸ್ಮಿತರಾಗುವರು. 'ಈ ದೇಶಕ್ಕೂ ಈ ಆಲಯಕ್ಕೂ
ಇಂತಹ ಭೀಕರ ಕಾರ್ಯವನ್ನು ಯೆಹೋವನು ಏಕೆ
ಮಾಡಿದನು?'ಎಂದು ಜನರು ಕೇಳುತ್ತಾರೆ. [9]'ಇದು ಏಕೆ
ಸಂಭವಿಸಿತೆಂದರೆ, ಅವರು ತಮ್ಮ ದೇವರಾದ ಯೆಹೋವ
ನನ್ನು ತ್ಯಜಿಸಿದರು. ಆತನು ಅವರ ಪೂರ್ವಿಕರನ್ನು ಈಜಿಪ್ಟಿ
ನಿಂದ ಬರಮಾಡಿದನು. ಆದರೆ ಅವರು ಅನ್ಯದೇವರು
ಗಳನ್ನು ಅನುಸರಿಸಲು ತೀರ್ಮಾನಿಸಿದರು. ಅವರು ಆ
ದೇವರುಗಳ ಪೂಜೆಯನ್ನೂ ಸೇವೆಯನ್ನೂ ಮಾಡಲಾ
ರಂಭಿಸಿದರು. ಆದಕಾರಣವೇ ಈ ಕೆಟ್ಟಕಾರ್ಯಗಳೆಲ್ಲಾ

---

**ವಿಶ್ರಾಂತಿಯ ಹಬ್ಬ** ಬಹುಶಃ ಪಸ್ಕ ಹಬ್ಬ.

ಅವರಿಗೆ ಸಂಭವಿಸುವಂತೆ ಯೆಹೋವನು ಮಾಡಿದನು’
ಎಂದು ಅನ್ಯಜನರು ಉತ್ತರಿಸುವರು.’’
10ಯೆಹೋವನ ಆಲಯವನ್ನು ಮತ್ತು ರಾಜನ
ಅರಮನೆಯನ್ನು ಕಟ್ಟಲು ರಾಜನಾದ ಸೊಲೊಮೋನ
ನಿಗೆ ಇಪ್ಪತ್ತು ವರ್ಷಗಳು ಹಿಡಿಯಿತು. 11ರಾಜನಾದ
ಸೊಲೊಮೋನನು ಇಪ್ಪತ್ತು ವರ್ಷಗಳ ತರುವಾಯ ಗಲಿ
ಲಾಯದ ಇಪ್ಪತ್ತು ಪಟ್ಟಣಗಳನ್ನು ತೂರಿನ ರಾಜನಾದ
ಹೀರಾಮನಿಗೆ ಬಿಟ್ಟುಕೊಟ್ಟನು. ಆಲಯವನ್ನು ಮತ್ತು
ಅರಮನೆಯನ್ನು ನಿರ್ಮಿಸಲು ಹೀರಾಮನು ಸಹಾಯ
ಮಾಡಿದ್ದರಿಂದ ಸೊಲೊಮೋನನು ಹೀರಾಮನಿಗೆ ಈ
ಪಟ್ಟಣಗಳನ್ನು ಕೊಟ್ಟನು. ಸೊಲೊಮೋನನು ಅಪೇಕ್ಷಿ
ಸಿದ ದೇವದಾರುಮರಗಳನ್ನು ತುರಾಯಿಮರಗಳನ್ನು
ಮತ್ತು ಬಂಗಾರವನ್ನು ಹೀರಾಮನು ಕೊಟ್ಟಿದ್ದನು.
12ಸೊಲೊಮೋನನು ಬಿಟ್ಟುಕೊಟ್ಟ ಪಟ್ಟಣಗಳನ್ನು
ನೋಡುವುದಕ್ಕಾಗಿ ಹೀರಾಮನು ತೂರಿನಿಂದ ಬಂದನು.
ಹೀರಾಮನು ಆ ಪಟ್ಟಣಗಳನ್ನು ನೋಡಿದಾಗ ಅವನಿಗೆ
ತೃಪ್ತಿಯಾಗಲಿಲ್ಲ. 13ರಾಜನಾದ ಹೀರಾಮನು,
‘‘ಸಹೋದರನೇ, ನೀನು ನನಗೆ ಕೊಟ್ಟಿರುವ ಪಟ್ಟಣಗಳು
ಏಕೆ ಹೀಗಿವೆ?’’ ಎಂದು ಕೇಳಿದನು. ರಾಜನಾದ ಹೀರಾ
ಮನು ಆ ದೇಶಕ್ಕೆ ಕಾಬೂಲ್ ದೇಶವೆಂದು* ಹೆಸರಿ
ಟ್ಟನು. ಆ ಪ್ರದೇಶವನ್ನು ಇಂದಿಗೂ ಕಾಬೂಲ್ ಎಂದೇ
ಕರೆಯುತ್ತಾರೆ. 14ಹೀರಾಮನು ರಾಜನಾದ ಸೊಲೊ
ಮೋನನಿಗೆ ಆಲಯದ ನಿರ್ಮಾಣಕ್ಕೆ ಉಪಯೋಗಿಸಲು
ಒಂಭತ್ತು ಸಾವಿರ ಪೌಂಡು ಬಂಗಾರವನ್ನು ಕಳುಹಿ
ಸಿದ್ದನು.
15ರಾಜನಾದ ಸೊಲೊಮೋನನು ತಾನು ನಿರ್ಮಿಸಿದ್ದ
ಆಲಯದ ಮತ್ತು ಅರಮನೆಯ ಕೆಲಸಗಳನ್ನು ಮಾಡಲು
ಗುಲಾಮರನ್ನು ಬಲಾತ್ಕರಿಸಿದನು. ರಾಜನಾದ ಸೊಲೊ
ಮೋನನು ಇತರ ಅನೇಕ ಕಟ್ಟಡಗಳ ನಿರ್ಮಾಣಕ್ಕೆ
ಬಿಟ್ಟಿಕೆಲಸದವರನ್ನು ಉಪಯೋಗಿಸಿಕೊಂಡನು. ಅವನು
ಮಿಲ್ಲೋ ಕೋಟೆಯನ್ನು ನಿರ್ಮಿಸಿದನು; ಜೆರುಸಲೇ
ಮಿನ ಸುತ್ತಲೂ ನಗರದ ಗೋಡೆಯನ್ನು ಕಟ್ಟಿಸಿದನು;
ಅಲ್ಲದೆ ಅವನು ಹಾಚೋರ್, ಮೆಗಿದ್ದೋ ಮತ್ತು ಗೆಜೆರ್
ನಗರಗಳನ್ನು ಕಟ್ಟಿಸಿದನು.
16ಹಿಂದೊಮ್ಮೆ, ಈಜಿಪ್ಟಿನ ರಾಜನು ಗೆಜೆರ್ ನಗರದ
ವಿರುದ್ಧ ಹೋರಾಟ ಮಾಡಿ, ಅದನ್ನು ಸುಟ್ಟು ಹಾಕಿದ್ದನು.
ಅವನು ಅಲ್ಲಿ ನೆಲೆಸಿದ್ದ ಕಾನಾನ್ಯ ಜನರನ್ನು ಕೊಂದು
ಹಾಕಿದ್ದನು. ಸೊಲೊಮೋನನು ಫರೋಹನ ಮಗಳನ್ನು
ಮದುವೆಯಾದನು. ಆದುದರಿಂದ ಫರೋಹನು ಆ ನಗರ
ವನ್ನು ಸೊಲೊಮೋನನಿಗೆ ಮದುವೆಯ ಕೊಡುಗೆಯಾಗಿ
ಕೊಟ್ಟನು. 17ರಾಜನಾದ ಸೊಲೊಮೋನನು ಆ ನಗರ
ವನ್ನು ಮತ್ತೆ ನಿರ್ಮಿಸಿದನು. ಸೊಲೊಮೋನನು ಕೆಳಗಿನ
ಬೇತ್‌ಹೋರೋನ್ ನಗರವನ್ನು ಸಹ ಕಟ್ಟಿಸಿದನು;
18ಮರಳುಗಾಡಿನಲ್ಲಿರುವ ಬಾಲಾತ್ ಮತ್ತು ತಾಮಾರ್
ನಗರಗಳನ್ನೂ ಕಟ್ಟಿಸಿದನು; 19ಧಾನ್ಯಗಳನ್ನು ಮತ್ತು ಇತರ
ವಸ್ತುಗಳನ್ನು ಸಂಗ್ರಹಿಸುವ ಉಗ್ರಾಣನಗರಗಳನ್ನು ಸಹ
ಕಟ್ಟಿಸಿದನು; ತನ್ನ ರಥಗಳಿಗೆ ಮತ್ತು ಕುದುರೆಗಳಿಗೆ
ತಾಣವಾದ ಸ್ಥಳಗಳನ್ನೂ ಕಟ್ಟಿಸಿದನು; ತಾನು ಆಳುತ್ತಿದ್ದ
ಜೆರುಸಲೇಮಿನಲ್ಲಿ, ಲೆಬನೋನಿನಲ್ಲಿ, ಮತ್ತಿತರ ಎಲ್ಲಾ
ಸ್ಥಳಗಳಲ್ಲಿ ತಾನು ಅಪೇಕ್ಷಿಸಿದ ಕಟ್ಟಡಗಳನ್ನೆಲ್ಲ ಕಟ್ಟಿಸಿ
ದನು.
20ಆ ದೇಶದಲ್ಲಿ ಇಸ್ರೇಲರಲ್ಲದ ಅನ್ಯಜನರೂ ಇದ್ದರು.
ಆ ಜನರೆಂದರೆ: ಅಮೋರಿಯರು, ಹಿತ್ತಿಯರು, ಪೆರಿಜ್ಜೀ
ಯರು, ಹಿವ್ವೀಯರು ಮತ್ತು ಯೆಬೂಸಿಯರು.
21ಇಸ್ರೇಲರು ಆ ಜನರನ್ನು ನಾಶಪಡಿಸಲು ಸಮರ್ಥ
ರಾಗಿರಲಿಲ್ಲ. ಆದರೆ ಸೊಲೊಮೋನನು ಅವರನ್ನು ತನ್ನ
ಕೆಲಸ ಮಾಡಲು ಗುಲಾಮರನ್ನಾಗಿ ಇಟ್ಟುಕೊಂಡನು;
ಅವರು ಇಂದಿಗೂ ಗುಲಾಮರಾಗಿದ್ದಾರೆ. 22ಸೊಲೊ
ಮೋನನು ಇಸ್ರೇಲರಾದ ಯಾರನ್ನೂ ತನ್ನ ಗುಲಾಮ
ರಾಗಲು ಬಲಾತ್ಕರಿಸಲಿಲ್ಲ. ಇಸ್ರೇಲಿನ ಜನರು ಸೈನಿಕ
ರಾಗಿದ್ದರು; ಸರ್ಕಾರದ ನೌಕರರಾಗಿದ್ದರು; ಅಧಿಕಾರಿ
ಗಳಾಗಿದ್ದರು; ಸೇನಾಪತಿಗಳಾಗಿದ್ದರು; ರಥಾಶ್ವಗಳಿಗೂ
ಅಶ್ವಪೇದೆಗೂ ಮಹಾಸೇನಾಧಿಪತಿಗಳಾಗಿದ್ದರು.
23ಸೊಲೊಮೋನನ ಯೋಜನೆಗಳ ಉಸ್ತುವಾರಿಗೆ
ಐನೂರ ಐವತ್ತು ಮಂದಿ ಮೇಲ್ವಿಚಾರಕರಿದ್ದರು. ಅವರು
ಕೆಲಸ ಮಾಡುವ ಜನರ ಮೇಲಿನ ಅಧಿಕಾರಿಗಳಾಗಿದ್ದರು.
24ಫರೋಹನ ಮಗಳು ದಾವೀದ ನಗರವನ್ನು ಬಿಟ್ಟು
ಸೊಲೊಮೋನನು ಅವಳಿಗಾಗಿ ಕಟ್ಟಿಸಿದ ದೊಡ್ಡ ಮನೆಗೆ
ಹೋದಳು. ಆಗ ಸೊಲೊಮೋನನು ಮಿಲ್ಲೋ*
ಕೋಟೆಯನ್ನು ಕಟ್ಟಿಸಿದನು.
25ಸೊಲೊಮೋನನು ಪ್ರತಿ ವರ್ಷದಲ್ಲೂ ಮೂರು ಸಲ
ಸರ್ವಾಂಗಹೋಮಗಳನ್ನು, ಸಮಾಧಾನಯಜ್ಞಗಳನ್ನು
ಯಜ್ಞವೇದಿಕೆಯ ಮೇಲೆ ಅರ್ಪಿಸುತ್ತಿದ್ದನು. ಈ ಯಜ್ಞ
ವೇದಿಕೆಯನ್ನು ಸೊಲೊಮೋನನು ಯೆಹೋವನಿಗಾಗಿ
ನಿರ್ಮಿಸಿದನು. ರಾಜನಾದ ಸೊಲೊಮೋನನು
ಯೆಹೋವನ ಮುಂದೆ ಸುಗಂಧಧೂಪವನ್ನು ಸುಡುತ್ತಿ
ದ್ದನು. ಅವನು ಆಲಯಕ್ಕೆ ಬೇಕಾದ ವಸ್ತುಗಳನ್ನು
ಕೊಡುತ್ತಿದ್ದನು.
26ರಾಜನಾದ ಸೊಲೊಮೋನನು ಏಚ್ಯೋನ್ಗೆಬೆರಿನಲ್ಲಿ
ಹಡಗುಗಳನ್ನು ಸಹ ನಿರ್ಮಿಸಿದನು. ಈ ಪಟ್ಟಣವು

**ಕಾಬೂಲ್ ದೇಶವೆಂದು** ಹೀಬ್ರೂ ಭಾಷೆಯಲ್ಲಿ ಕಾಬೂಲ್ ಎಂದರೆ ‘‘ಬೆಲೆಯಿಲ್ಲದ್ದು’’ ಎಂದರ್ಥ.

**ಮಿಲ್ಲೋ** ಜೆರುಸಲೇಮಿನ ದೇವಾಲಯದ ಆಗ್ನೇಯ ದಿಕ್ಕಿನ ಪ್ರದೇಶದಲ್ಲಿದ್ದ ಎತ್ತರವಾದ ವೇದಿಕೆಯೇ ಬಹುಶಃ ‘ಮಿಲ್ಲೋ’.

ಎದೋಮ್ ದೇಶದಲ್ಲಿ ಕೆಂಪು ಸಮುದ್ರತೀರದ
ಏಲೋತಿನ ಹತ್ತಿರದಲ್ಲಿದೆ. 27ಸಮುದ್ರದ ಬಗ್ಗೆ ಹೆಚ್ಚಗೆ
ತಿಳಿದಿರುವ ಕೆಲವು ಜನರು ರಾಜನಾದ ಹೀರಾಮನ ಹತ್ತಿರ
ಇದ್ದರು. ಅವರು ಅನುಭವಸ್ತ ನಾವಿಕರಾಗಿದ್ದರು.
ಸೊಲೊಮೋನನ ಹಡಗುಗಳಲ್ಲಿ ಅವನ ಜನರೊಡನೆ
ಕೆಲಸ ಮಾಡಲು, ರಾಜನಾದ ಹೀರಾಮನು ತನ್ನ ನಿಪುಣ
ರಾದ ಜನರನ್ನು ಕಳುಹಿಸಿದನು. 28ಸೊಲೊಮೋನನ
ಹಡುಗುಗಳು ಓಫೀರಿಗೆ ಹೋದವು. ಆ ಹಡಗುಗಳು
ರಾಜನಾದ ಸೊಲೊಮೋನನಿಗೆ ಹದಿನಾಲ್ಕು ಸಾವಿರದ
ಇನ್ನೂರ ಎಂಭತ್ತು ಕಿಲೋ.ಗ್ರಾಂ. ಬಂಗಾರವನ್ನು
ಓಫೀರಿನಿಂದ ತೆಗೆದುಕೊಂಡು ಬಂದವು.

### ಶೆಬದ ರಾಣಿಯು ಸೊಲೊಮೋನನನ್ನು ಸಂದರ್ಶಿಸಿದಳು

10 ಶೆಬದ ರಾಣಿ ಸೊಲೊಮೋನನ ಬಗ್ಗೆ
ಕೇಳಿದಳು. ಅವಳು ಒಗಟುಗಳಿಂದ ಅವನನ್ನು
ಪರೀಕ್ಷಿಸಲು 2ತನ್ನ ಸೇವಕರ ದೊಡ್ಡ ಗುಂಪಿನೊಡನೆ
ಜೆರುಸಲೇಮಿಗೆ ಬಂದಳು. ಅನೇಕ ಒಂಟೆಗಳ ಮೇಲೆ
ಸಾಂಬಾರ ಪದಾರ್ಥ ಗಳನ್ನು, ಮುತ್ತುಗಳನ್ನು ಮತ್ತು
ಬಹಳ ಬಂಗಾರವನ್ನು ಹೇರಿಸಿಕೊಂಡು ಬಂದಳು. ಅವಳು
ಸೊಲೊಮೋನ ನನ್ನು ಸಂದಿಸಿ, ತನ್ನ ಮನಸ್ಸಿನಲ್ಲಿದ್ದ ಎಲ್ಲ
ಪ್ರಶ್ನೆಗಳನ್ನು ಅವನಿಗೆ ಕೇಳಿದಳು. 3ಸೊಲೊಮೋನನು
ಎಲ್ಲಾ ಪ್ರಶ್ನೆ ಗಳಿಗೂ ಉತ್ತರಿಸಿದನು. ಅವಳ ಯಾವ
ಪ್ರಶ್ನೆಗಳೂ ಅವ ನಿಗೆ ಹೆಚ್ಚು ಕಠಿಣವೆನಿಸಲಿಲ್ಲ.
4ಸೊಲೊಮೋನನು ಬಹು ಜ್ಞಾನಿಯೆಂಬುದು ಶೆಬದ
ರಾಣಿಗೆ ತಿಳಿಯಿತು. ಅವನು ನಿರ್ಮಿಸಿದ್ದ ಸುಂದರವಾದ
ಅರಮನೆಯನ್ನೂ 5ರಾಜನ ಮೇಜಿನ ಮೇಲಿದ್ದ
ಆಹಾರವನ್ನೂ ಒಟ್ಟಾಗಿ ಸೇರಿ ಬರುತ್ತಿದ್ದ ಅವನ
ಅಧಿಕಾರಿಗಳನ್ನೂ ಅರ ಮನೆಯಲ್ಲಿದ್ದ ಸೇವಕರನ್ನೂ
ಮತ್ತು ಅವರು ಧರಿಸಿದ್ದ ಉತ್ತಮ ಬಟ್ಟೆಗಳನ್ನೂ ಅವಳು
ನೋಡಿದಳು. ಅವನ ಔತಣ ಕೂಟಗಳನ್ನೂ ಅವನು
ಆಲಯದಲ್ಲಿ ಅರ್ಪಿಸುತ್ತಿದ್ದ ಯಜ್ಞಗಳನ್ನೂ ಅವಳು
ನೋಡಿದಳು. ಇವುಗಳಿಂದ ಅವಳಿಗೆ ನಿಜವಾಗಿಯೂ
‘ಉಸಿರುಕಟ್ಟಿಸು ವಂತಹ’ ವಿಸ್ಮಯವಾಯಿತು.
6ಆದುದರಿಂದ ರಾಣಿಯು ರಾಜನಿಗೆ, ‘‘ನಿನ್ನ ಜ್ಞಾನದ
ಬಗ್ಗೆ ಮತ್ತು ನೀನು ಮಾಡುವ ಕಾರ್ಯಗಳ ಬಗ್ಗೆ ಅನೇಕ
ಸಂಗತಿಗಳನ್ನು ನಾನು ನನ್ನ ದೇಶದಲ್ಲಿ ಕೇಳಿದ್ದೇನೆ. ಆ
ಸಂಗತಿಗಳೆಲ್ಲ ನಿಜ! 7ನಾನೇ ಬಂದು, ನನ್ನ ಸ್ವಂತ ಕಣ್ಣುಗ
ಳಿಂದ ಆ ಸಂಗತಿಗಳನ್ನು ನೋಡುವವರೆಗೆ ನಾನು
ನಂಬಲೇ ಇಲ್ಲ. ಆದರೆ ನಾನು ಕೇಳಿದುದಕ್ಕಿಂತಲೂ
ಮಹತ್ವವಾದ ಸಂಗತಿಗಳನ್ನು ಈಗ ನೋಡುತ್ತಿದ್ದೇನೆ.
ಜನರು ಹೇಳಿದುದಕ್ಕಿಂತ ಅತ್ಯಂತ ಹೆಚ್ಚಿನ ಜ್ಞಾನವೂ
ಐಶ್ವರ್ಯವೂ ನಿನ್ನಲ್ಲಿದೆ. 8ನಿನ್ನ ಪತ್ನಿಯರೂ* ಅಧಿಕಾರಿ
ಗಳೂ ಧನ್ಯರೇ ಸರಿ! ಯಾಕೆಂದರೆ ಅವರು ನಿನ್ನ ಸೇವೆ
ಮಾಡುತ್ತಾ ನಿನ್ನ ಜ್ಞಾನವಾಕ್ಯಗಳನ್ನು ಕೇಳಬಹುದು! 9ನಿನ್ನ
ದೇವರಾದ ಯೆಹೋವನಿಗೆ ಸ್ತೋತ್ರವಾಗಲಿ ! ನಿನ್ನನ್ನು
ಇಸ್ರೇಲಿನ ರಾಜನಾಗಿ ಮಾಡಲು ಆತನು ಸಂತೋಷ
ಪಟ್ಟಿರಬೇಕು. ದೇವರಾದ ಯೆಹೋವನು ಇಸ್ರೇಲನ್ನು
ಪ್ರೀತಿಸುತ್ತಾನೆ. ಆದುದರಿಂದಲೇ ಆತನು ನಿನ್ನನ್ನು ರಾಜನ
ನ್ನಾಗಿ ನೇಮಿಸಿದನು. ನೀನು ಕಟ್ಟಳೆಗಳನ್ನು ಅನುಸರಿಸು
ತ್ತಿರುವೆ ಮತ್ತು ಜನರಿಗೆ ನ್ಯಾಯ ದೊರಕಿಸುತ್ತಿರುವೆ’’
ಎಂದು ಹೇಳಿದಳು.

10ನಂತರ ಶೆಬದ ರಾಣಿಯು ರಾಜನಿಗೆ ನಾಲ್ಕು ಸಾವಿರ
ಎಂಭತ್ತು ಕಿಲೋ.ಗ್ರಾಂ.ಬಂಗಾರವನ್ನು ಕೊಟ್ಟಳು.
ಅವಳು ಅವನಿಗೆ ಅನೇಕ ಸಾಂಬಾರ ಪದಾರ್ಥಗಳನ್ನು
ಮತ್ತು ರತ್ನಗಳನ್ನು ಕೊಟ್ಟಳು. ಹಿಂದೆಂದೂ ಯಾರೂ
ಇಸ್ರೇಲಿಗೆ ತೆಗೆದುಕೊಂಡು ಬಂದಿಲ್ಲದ್ದಷ್ಟು ಸಾಂಬಾರ
ಪದಾರ್ಥಗಳನ್ನು ಶೆಬದ ರಾಣಿಯು ಸೊಲೊಮೋನನಿಗೆ
ಕೊಟ್ಟಳು.

11ಹೀರಾಮನ ಹಡಗುಗಳು ಓಫೀರಿನಿಂದ ಬಂಗಾರ
ವನ್ನು ತೆಗೆದುಕೊಂಡು ಬಂದವು. ಆ ಹಡಗುಗಳು ಮರ
ಗಳನ್ನು ಮತ್ತು ರತ್ನಗಳನ್ನು ರಾಶಿರಾಶಿಯಾಗಿ ತಂದವು.
12ಸೊಲೊಮೋನನು ಮರವನ್ನು ಆಲಯದ ಮತ್ತು
ಅರಮನೆಯ ಆಧಾರಕಂಬಗಳಿಗಾಗಿ ಬಳಸಿದನು. ಅವನು
ಹಾಡುಗಾರರಿಗೆ ಬೇಕಾದ ಹಾರ್ಪ್‌ವಾದ್ಯಗಳನ್ನು ಮತ್ತು
ಲೈರ್‌ವಾದ್ಯಗಳನ್ನು ತಯಾರಿಸಲು ಆ ಮರವನ್ನು ಉಪ
ಯೋಗಿಸಿದನು. ಹಿಂದೆಂದೂ ಯಾವ ವ್ಯಕ್ತಿಯೂ ಅಂತಹ
ಮರವನ್ನು ಇಸ್ರೇಲಿಗೆ ತಂದಿರಲಿಲ್ಲ ಮತ್ತು ಅಲ್ಲಿಯವರೆಗೆ
ಇಸ್ರೇಲಿನ ಯಾವ ವ್ಯಕ್ತಿಯೂ ಅಂತಹ ಮರವನ್ನು
ನೋಡಿರಲಿಲ್ಲ.

13ಆಗ ರಾಜನಾದ ಸೊಲೊಮೋನನು ಇತರ ದೇಶದ
ರಾಜರಿಗೆ ಮರ್ಯಾದೆಗಾಗಿ ನೀಡುವ ಕಾಣಿಕೆಗಳನ್ನು
ಶೆಬದ ರಾಣಿಗೂ ಕೊಟ್ಟನು. ಆಕೆಯು ಕೇಳಿದ್ದೆಲ್ಲವನ್ನೂ
ಅವನು ನೀಡಿದನು. ಅನಂತರ ರಾಣಿಯು ಸೇವಕರೊಡನೆ
ತನ್ನ ದೇಶಕ್ಕೆ ಹಿಂದಿರುಗಿದಳು.

14ರಾಜನಾದ ಸೊಲೊಮೋನನು ಪ್ರತಿವರ್ಷವೂ
ಇಪ್ಪತ್ತೆರಡು ಸಾವಿರದ ಆರುನೂರ ನಲವತ್ನಾಲ್ಕು
ಕಿಲೋ.ಗ್ರಾಂ. ಬಂಗಾರವನ್ನು ಪಡೆಯುತ್ತಿದ್ದನು.
15ಹಡಗುಗಳಿಂದ ಸಿಗುತ್ತಿದ್ದ ಬಂಗಾರವಲ್ಲದೆ ವ್ಯಾಪಾರಿ
ಗಳಿಂದಲೂ ಅರೇಬಿಯಾದ ರಾಜರಿಂದಲೂ ರಾಜ್ಯಪಾಲ
ರುಗಳಿಂದಲೂ ಬಂಗಾರವನ್ನು ಅವನು ಪಡೆಯುತ್ತಿ
ದ್ದನು.

---

**ಪತ್ನಿಯರೂ** ಇದು ಪುರಾತನ ಗ್ರೀಕ್ ಭಾಷಾಂತರದಲ್ಲಿದೆ. ಹೀಬ್ರೂವಿನ ಪ್ರತಿಯಲ್ಲಿ ‘‘ಪುರುಷರು’’ ಎಂದಿದೆ.

16 ರಾಜನಾದ ಸೊಲೊಮೋನನು ಬಂಗಾರದ ತಗಡಿ
ನಿಂದ ಇನ್ನೂರು ದೊಡ್ಡ ಗುರಾಣಿಗಳನ್ನು ಮಾಡಿಸಿದನು.
ಪ್ರತಿಯೊಂದು ಗುರಾಣಿಯಲ್ಲಿ ಏಳು ಕಿಲೋ.ಗ್ರಾಂ.
ಬಂಗಾರವಿತ್ತು. 17 ಅವನು ಬಂಗಾರದ ತಗಡಿನಿಂದ
ಮುನ್ನೂರು ಚಿಕ್ಕ ಗುರಾಣಿಗಳನ್ನು ಮಾಡಿಸಿದನು. ಪ್ರತಿ
ಯೊಂದು ಗುರಾಣಿಯಲ್ಲಿ ನಾಲ್ಕು ಪೌಂಡುಗಳಷ್ಟು
ಬಂಗಾರವಿತ್ತು. ರಾಜನು ಅವುಗಳನ್ನು ‘‘ಲೆಬನೋನಿನ
ಅರಣ್ಯ’’ ಎಂದು ಕರೆಯುವ ಕಟ್ಟಡದಲ್ಲಿಟ್ಟನು.
18 ರಾಜನಾದ ಸೊಲೊಮೋನನು ವಿಶಾಲವಾದ
ದಂತದ ಸಿಂಹಾಸನವನ್ನು ಸಹ ಮಾಡಿಸಿದನು. ಅವನು
ಅಪ್ಪಟ ಚಿನ್ನದ ತಗಡನ್ನು ಅದಕ್ಕೆ ಹೊದಿಸಿದನು.
19 ಸಿಂಹಾಸನದ ಮೇಲಕ್ಕೆ ಹತ್ತಲು ಅದರಲ್ಲಿ ಆರು
ಮೆಟ್ಟಿಲುಗಳಿದ್ದವು. ಸಿಂಹಾಸನದ ಮೇಲ್ಭಾಗವು ವೃತ್ತಾಕಾ
ರವಾಗಿತ್ತು. ಆ ಸಿಂಹಾಸನದ ಎರಡು ಕಡೆಗಳಲ್ಲಿ ಎರಡು
ತೋಳುಗಳಿದ್ದವು. ಆ ಸಿಂಹಾಸನದ ತೋಳುಗಳ ಕೆಳ
ಭಾಗದಲ್ಲಿ ಸಿಂಹದ ಚಿತ್ರಗಳಿದ್ದವು. 20 ಆರು ಮೆಟ್ಟಿಲುಗಳ
ಪ್ರತಿಯೊಂದು ಮೆಟ್ಟಲಿನಲ್ಲಿ ಎರಡು ಸಿಂಹಗಳಿದ್ದವು. ಪ್ರತಿ
ಯೊಂದು ಕೊನೆಯಲ್ಲಿ ಒಂದು ಸಿಂಹವಿತ್ತು. ಬೇರೆ ಯಾವ
ರಾಜ್ಯದಲ್ಲೂ ಇಂತಹ ಸಿಂಹಾಸನ ಇರಲಿಲ್ಲ.
21 ಸೊಲೊಮೋನನ ಬಟ್ಟಲುಗಳು ಮತ್ತು ಲೋಟಗಳು
ಬಂಗಾರದಿಂದ ತಯಾರಿಸಲಾಗಿದ್ದವು. ‘‘ಲೆಬನೋನಿನ
ಅರಣ್ಯ’’ ಎಂದು ಕರೆಯುವ ಕಟ್ಟಡದಲ್ಲಿದ್ದ ಎಲ್ಲಾ
ಆಯುಧಗಳನ್ನು ಅಪ್ಪಟ ಚಿನ್ನದಿಂದ ಮಾಡಿದ್ದರು. ಅರ
ಮನೆಯ ಯಾವ ವಸ್ತುವನ್ನೂ ಬೆಳ್ಳಿಯಿಂದ ಮಾಡಿರ
ಲಿಲ್ಲ. ಜನರು ಬೆಳ್ಳಿಯನ್ನು ಅಮೂಲ್ಯವೆಂದು ಯೋಚಿಸ
ದಷ್ಟು ಬಂಗಾರವು ಸೊಲೊಮೋನನ ಕಾಲದಲ್ಲಿತ್ತು!
22 ರಾಜನಾದ ಸೊಲೊಮೋನನ ಹತ್ತಿರ ಅನೇಕ ಸರಕು
ಸಾಗಣಿಕೆಯ ಹಡಗುಗಳಿದ್ದವು. ಅವನು ಅವುಗಳನ್ನು
ಇತರ ದೇಶಗಳಲ್ಲಿನ ವ್ಯಾಪಾರಕ್ಕಾಗಿ ಕಳುಹಿಸುತ್ತಿದ್ದನು.
ಇವು ಹೀರಾಮನ ಹಡಗುಗಳು. ಈ ಹಡಗುಗಳು
ಬಂಗಾರ, ಬೆಳ್ಳಿ, ದಂತ ಮತ್ತು ಪ್ರಾಣಿಗಳನ್ನು ಹೊಸದಾಗಿ
ತುಂಬಿಕೊಂಡು ಮೂರು ವರ್ಷಕ್ಕೊಮ್ಮೆ ಹಿಂದಿರು
ಗುತ್ತಿದ್ದವು.
23 ಸೊಲೊಮೋನನು ಭೂಲೋಕದ ರಾಜರುಗಳ
ಲ್ಲೆಲ್ಲಾ ಅತ್ಯಂತ ಬಲಿಷ್ಠನಾಗಿದ್ದನು. ಅವನು ರಾಜರು
ಗಳಲ್ಲೆಲ್ಲಾ ಹೆಚ್ಚು ಶ್ರೀಮಂತನೂ ಜ್ಞಾನಿಯೂ ಆಗಿದ್ದನು.
24 ಭೂಲೋಕದವರೆಲ್ಲರೂ ರಾಜನಾದ ಸೊಲೊಮೋನ
ನನ್ನು ನೋಡುವುದಕ್ಕೂ ದೇವರು ಸೊಲೊಮೋನನಿಗೆ
ದಯಪಾಲಿಸಿರುವ ಜ್ಞಾನವಾಕ್ಯಗಳನ್ನು ಕೇಳುವುದಕ್ಕೂ
ಅಪೇಕ್ಷಿಸುತ್ತಿದ್ದರು. 25 ಪ್ರತಿವರ್ಷವೂ ರಾಜನನ್ನು
ನೋಡಲು ಜನರು ಬರುತ್ತಿದ್ದರು. ಪ್ರತಿಯೊಬ್ಬನೂ
ಕಾಣಿಕೆಯನ್ನು ತರುತ್ತಿದ್ದನು. ಅವರು ಬೆಳ್ಳಿಬಂಗಾರದಿಂದ
ಮಾಡಿದ ವಸ್ತುಗಳನ್ನು, ಆಯುಧಗಳನ್ನು, ಉಡುಪು
ಗಳನ್ನು, ಸಾಂಬಾರ ಪದಾರ್ಥಗಳನ್ನು, ಕುದುರೆಗಳನ್ನು
ಮತ್ತು ಹೇಸರ ಕತ್ತೆಗಳನ್ನು ತರುತ್ತಿದ್ದರು.
26 ಆದುದರಿಂದ ಅಸಂಖ್ಯವಾದ ರಥಗಳೂ ಕುದುರೆ
ಗಳೂ ಸೊಲೊಮೋನನಲ್ಲಿದ್ದವು. ಅವನಲ್ಲಿ ಒಂದು
ಸಾವಿರದ ನಾನೂರು ರಥಗಳು ಮತ್ತು ಹನ್ನೆರಡು ಸಾವಿರ
ಕುದುರೆಗಳಿದ್ದವು. ಸೊಲೊಮೋನನು ಈ ರಥಗಳಿಗಾಗಿ
ವಿಶೇಷವಾದ ನಗರಗಳನ್ನು ಕಟ್ಟಿಸಿದನು. ಆ ನಗರಗಳಲ್ಲಿ
ರಥಗಳನ್ನು ಇರಿಸಿದನು. ರಾಜನಾದ ಸೊಲೊಮೋನನು
ಕೆಲವು ರಥಗಳನ್ನು ಜೆರುಸಲೇಮಿನಲ್ಲಿ ತನ್ನ ಹತ್ತಿರ ಇಟ್ಟು
ಕೊಂಡನು. 27 ರಾಜನು ಇಸ್ರೇಲನ್ನು ಬಹಳ ಶ್ರೀಮಂತ
ವಾಗಿರಿಸಿದನು. ಜೆರುಸಲೇಮಿನಲ್ಲಿ ಬೆಳ್ಳಿಯು ಕಲ್ಲುಗ
ಳಂತೆಯೂ ದೇವದಾರುಮರಗಳು ಬೆಟ್ಟದ ಮೇಲೆ ಬೆಳೆ
ಯುವ ಅನೇಕ ಅಂಜೂರದ ಗಿಡಗಳಂತೆಯೂ ಹೇರಳ
ವಾಗಿದ್ದವು. 28 ಸೊಲೊಮೋನನು ಈಜಿಪ್ಟ್ ಮತ್ತು
ಕ್ಯೂಗಳಲ್ಲಿ ಕುದುರೆಗಳನ್ನು ಖರೀದಿಸಿ ಆಮದು ಮಾಡಿ
ಕೊಂಡನು. ಅವನ ವ್ಯಾಪಾರಿಗಳು ಅವುಗಳನ್ನು ಕ್ಯೂನಿಂದ
ಇಸ್ರೇಲಿಗೆ ತರುತ್ತಿದ್ದರು. 29 ಈಜಿಪ್ಟಿನ ಒಂದು ರಥದ
ಬೆಲೆಯು ಏಳು ಕಿಲೋ.ಗ್ರಾಂ ಆದರೆ ಒಂದು
ಕುದುರೆಯ ಬೆಲೆಯು ಎರಡು ಕಿಲೋ.ಗ್ರಾಂ ಬೆಳ್ಳಿ
ಯಾಗಿತ್ತು. ಸೊಲೊಮೋನನು ಹಿತ್ತಿಯ ಮತ್ತು ಅರಾಮ್ಯ
ರಾಜರುಗಳಿಗೆ ಕುದುರೆಗಳನ್ನೂ ರಥಗಳನ್ನೂ ಮಾರಿ
ದನು.

## ಸೊಲೊಮೋನನು ಮತ್ತು ಅವನ ಅನೇಕ ಪತ್ನಿಯರು

11 ರಾಜನಾದ ಸೊಲೊಮೋನನು ಸ್ತ್ರೀಯರನ್ನು
ಪ್ರೀತಿಸಿದನು! ಅವನು ಇಸ್ರೇಲರಲ್ಲದ ಅನೇಕ
ಸ್ತ್ರೀಯರನ್ನು ಪ್ರೀತಿಸಿದನು. ಇವರಲ್ಲಿ ಫರೋಹನ
ಮಗಳು, ಮೋವಾಬ್ಯ, ಅಮ್ಮೋನಿಯ, ಎದೋಮ್ಯ,
ಚೀದೋನ್ಯ ಮತ್ತು ಹಿತ್ತಿಯ ಸ್ತ್ರೀಯರು ಸೇರಿದ್ದರು.
2 ಯೆಹೋವನು ಮೊದಲೇ ಇಸ್ರೇಲಿನ ಜನರಿಗೆ,
‘‘ಅನ್ಯದೇಶದ ಸ್ತ್ರೀಯರನ್ನು ನೀವು ಮದುವೆಯಾಗಲೇ
ಬಾರದು. ನೀವು ಅವರನ್ನು ಮದುವೆಯಾದರೆ, ತಮ್ಮ
ದೇವರುಗಳನ್ನು ಅನುಸರಿಸುವಂತೆ ಅವರು ನಿಮ್ಮನ್ನು
ಪ್ರೇರೇಪಿಸುತ್ತಾರೆ’’ ಎಂದು ಹೇಳಿದ್ದನು. ಆದರೆ ಸೊಲೊ
ಮೋನನು ಈ ಸ್ತ್ರೀಯರನ್ನು ಪ್ರೀತಿಸತೊಡಗಿದನು.
3 ಸೊಲೊಮೋನನಿಗೆ ಏಳುನೂರು ಮಂದಿ ಪತ್ನಿಯ
ರಿದ್ದರು. (ಈ ಸ್ತ್ರೀಯರು ಅನ್ಯದೇಶಗಳ ನಾಯಕರ
ಹೆಣ್ಣುಮಕ್ಕಳು) ಅವನಿಗೆ ಪತ್ನಿಯರಂತಿರುವ ಮುನ್ನೂರು
ಮಂದಿ ಉಪಪತ್ನಿಯರೂ ಇದ್ದರು. ಅವನ ಪತ್ನಿಯರು
ಅವನನ್ನು ದೇವರಿಗೆ ವಿಮುಖನನ್ನಾಗಿ ಮಾಡಿದರು.
4 ಸೊಲೊಮೋನನು ವೃದ್ಧನಾದಾಗ, ತನ್ನ ಪತ್ನಿಯರ

ದೆಸೆಯಿಂದಾಗಿ ಅನ್ಯದೇವತೆಗಳನ್ನು ಅನುಸರಿಸಿದನು. ತನ್ನ
ತಂದೆಯಾದ ದಾವೀದನು ಯೆಹೋವನನ್ನು ಅನುಸರಿಸಿ
ದಂತೆ ಸೊಲೊಮೋನನು ಪೂರ್ಣಮನಸ್ಸಿನಿಂದ
ಯೆಹೋವನನ್ನು ಅನುಸರಿಸಲಿಲ್ಲ. [5]ಸೊಲೊಮೋನನು
ಅಷ್ಟೋರೆತ್* ದೇವತೆಯನ್ನು ಪೂಜಿಸಿದನು. ಇದು
ಚೀದೋನ್ಯರ ದೇವತೆ. ಸೊಲೊಮೋನನು ಮಿಲ್ಕೋಮ
ನನ್ನು ಆರಾಧಿಸಿದನು. ಇದು ಅಮ್ಮೋನಿಯರ ಭಯಂಕರ
ವಿಗ್ರಹ. [6]ಹೀಗೆ ಸೊಲೊಮೋನನು ಯೆಹೋವನ
ದೃಷ್ಟಿಯಲ್ಲಿ ಕೆಟ್ಟದಾಗಿದ್ದ ಕಾರ್ಯಗಳನ್ನು ಮಾಡಿದನು;
ತನ್ನ ತಂದೆಯಾದ ದಾವೀದನು ಪೂರ್ಣಮನಸ್ಸಿನಿಂದ
ಯೆಹೋವನನ್ನು ಅನುಸರಿಸಿದಂತೆ ಅನುಸರಿಸಲಿಲ್ಲ.

[7]ಸೊಲೊಮೋನನು ಕೆಮೋಷನನ್ನು ಆರಾಧಿಸಲು
ಒಂದು ಸ್ಥಳವನ್ನು ನಿರ್ಮಿಸಿದನು. ಮೋವಾಬ್ಯರ
ಭಯಂಕರ ವಿಗ್ರಹವೇ ಕೆಮೋಷ್. ಜೆರುಸಲೇಮಿನ ಪಕ್ಕ
ದಲ್ಲಿದ್ದ ಬೆಟ್ಟದ ಮೇಲೆ ಸೊಲೊಮೋನನು ಆರಾಧನೆಯ
ಸ್ಥಳವನ್ನು ನಿರ್ಮಿಸಿದನು. ಆ ಬೆಟ್ಟದ ಮೇಲೆಯೇ
ಸೊಲೊಮೋನನು ಮೋಲೆಕ್ ದೇವತೆಯ ಪೂಜಾ ಸ್ಥಳ
ವನ್ನು ನಿರ್ಮಿಸಿದನು. ಅಮ್ಮೋನಿಯರ ಭಯಂಕರ
ವಿಗ್ರಹವೇ ಮೋಲೆಕ್. [8]ಸೊಲೊಮೋನನು ಅನ್ಯದೇಶ
ಗಳ ತನ್ನ ಪತ್ನಿಯರಿಗೆಲ್ಲ ಇದೇ ರೀತಿ ಮಾಡಿದನು. ಅವನ
ಪತ್ನಿಯರು ತಮ್ಮ ದೇವರುಗಳಿಗೆ ಧೂಪ ಹಾಕಿದರು
ಮತ್ತು ಯಜ್ಞಗಳನ್ನು ಅರ್ಪಿಸಿದರು.

[9]ಸೊಲೊಮೋನನು ಇಸ್ರೇಲಿನ ದೇವರಾದ
ಯೆಹೋವನನ್ನು ಅನುಸರಿಸದೆ ಬೇರೆ ಕಡೆಗೆ ತಿರುಗಿ
ಕೊಂಡನು. ಆದುದರಿಂದ ಯೆಹೋವನು ಸೊಲೊಮೋ
ನನ ಮೇಲೆ ಕೋಪಗೊಂಡನು. ಯೆಹೋವನು ಎರಡು
ಸಲ ಸೊಲೊಮೋನನಿಗೆ ದರ್ಶನವನ್ನು ನೀಡಿದ್ದನು.
[10]ಅನ್ಯದೇವತೆಗಳನ್ನು ಅನುಸರಿಸಬಾರದೆಂದು ಯೆಹೋ
ವನು ಸೊಲೊಮೋನನಿಗೆ ಹೇಳಿದನು. ಆದರೆ
ಸೊಲೊಮೋನನು ಯೆಹೋವನ ಆಜ್ಞೆಯನ್ನು ಅನು
ಸರಿಸಲಿಲ್ಲ. [11]ಆದುದರಿಂದ ಯೆಹೋವನು ಸೊಲೊ
ಮೋನನಿಗೆ, ‘‘ನಮ್ಮಿಬ್ಬರ ನಡುವೆಯಿದ್ದ ಒಡಂಬಡಿಕೆ
ಯನ್ನು ಮೀರಿಬಿಟ್ಟೆ, ನೀನು ನನ್ನ ಆಜ್ಞೆಗಳನ್ನು ಅನುಸ
ರಿಸಲಿಲ್ಲ. ಆದ್ದರಿಂದ ನಿನ್ನ ರಾಜ್ಯವನ್ನು ನಿನ್ನಿಂದ ಕಿತ್ತು
ಕೊಂಡು ನಿನ್ನ ಸೇವಕರಲ್ಲಿ ಒಬ್ಬನಿಗೆ ಅದನ್ನು ಕೊಡು
ವುದಾಗಿ ನಾನು ಪ್ರಮಾಣ ಮಾಡುತ್ತೇನೆ. [12]ಆದರೆ ನಿನ್ನ
ತಂದೆಯಾದ ದಾವೀದನನ್ನು ನಾನು ಪ್ರೀತಿಸಿದ್ದರಿಂದ
ನೀನು ಜೀವಂತವಾಗಿರುವಾಗಲೇ ನಿನ್ನ ರಾಜ್ಯವನ್ನು
ನಿನ್ನಿಂದ ನಾನು ತೆಗೆದುಕೊಳ್ಳುವುದಿಲ್ಲ. ನಿನ್ನ ಮಗನು
ರಾಜನಾಗುವವರೆಗೆ ನಾನು ಕಾಯುತ್ತೇನೆ. ನಂತರ ನಾನು
ಅದನ್ನು ಅವನಿಂದ ತೆಗೆದುಕೊಳ್ಳುತ್ತೇನೆ. [13]ಆದರೂ ನಿನ್ನ
ಮಗನಿಂದ ರಾಜ್ಯವನ್ನೆಲ್ಲ ನಾನು ಕಿತ್ತುಕೊಳ್ಳುವುದಿಲ್ಲ.
ನಾನು ಅವನಿಗೆ ಒಂದು ಕುಲವನ್ನು ಆಳಲು ಬಿಡುತ್ತೇನೆ.
ನಾನು ದಾವೀದನಿಗಾಗಿ ಹೀಗೆ ಮಾಡುತ್ತೇನೆ. ಅವನು
ನನಗೆ ಒಬ್ಬ ಒಳ್ಳೆಯ ಸೇವಕನಾಗಿದ್ದನು. ನಾನು ಇದನ್ನು
ಜೆರುಸಲೇಮಿನ ಏಳಿಗೆಗಾಗಿ ಮಾಡುತ್ತೇನೆ. ನಾನೇ ಆ
ನಗರವನ್ನು ಆರಿಸಿಕೊಂಡೆನು’’ ಎಂದು ಹೇಳಿದನು.

## ಸೊಲೊಮೋನನ ಶತ್ರುಗಳು

[14]ಆ ಸಮಯದಲ್ಲಿ ಸೊಲೊಮೋನನಿಗೆ ಶತ್ರುವಾಗು
ವಂತೆ ಎದೋಮ್ಯನಾದ ಹದದನನ್ನು ಯೆಹೋವನು
ಪ್ರೇರೇಪಿಸಿದನು. ಹದದನು ರಾಜನಾದ ಎದೋಮ್ಯನ
ವಂಶದವನು. [15]ಅದು ಹೀಗೆ ಸಂಭವಿಸಿತು: ದಾವೀದನು
ಮೊದಲು ಎದೋಮ್ಯರನ್ನು ಸೋಲಿಸಿದ್ದನು, ದಾವೀದನ
ಸೈನ್ಯಕ್ಕೆ ಯೋವಾಬನು ಸೇನಾಪತಿಯಾಗಿದ್ದನು. ಸತ್ತ
ಜನರನ್ನು ಸಮಾಧಿ ಮಾಡಲು ಯೋವಾಬನು
ಎದೋಮಿಗೆ ಹೋದನು. ಅಲ್ಲಿ ಇನ್ನೂ ವಾಸವಾಗಿದ್ದ
ಗಂಡಸರನ್ನೆಲ್ಲ ಯೋವಾಬನು ಕೊಂದುಹಾಕಿದನು.
[16]ಯೋವಾಬನು ಮತ್ತು ಇಸ್ರೇಲರು ಎದೋಮಿನಲ್ಲಿ
ಆರು ತಿಂಗಳ ಕಾಲ ನೆಲೆಸಿದ್ದರು. ಆ ಸಂದರ್ಭದಲ್ಲಿ
ಅವರು ಎದೋಮಿನ ಗಂಡಸರನ್ನೆಲ್ಲ ಕೊಂದು ಹಾಕಿ
ದರು. [17]ಆದರೆ ಆ ಕಾಲಕ್ಕೆ ಹದದನಿನ್ನೂ ಚಿಕ್ಕ ಬಾಲಕ
ನಾಗಿದ್ದನು. ಆದುದರಿಂದ ಹದದನು ಈಜಿಪ್ಟಿಗೆ ಓಡಿ
ಹೋದನು. ಅವನ ತಂದೆಯ ಕೆಲವು ಜನ ಸೇವಕರೂ
ಅವನೊಡನೆ ಹೋದರು. [18]ಅವರು ಮಿದ್ಯಾನನ್ನು ಬಿಟ್ಟು
ಪಾರಾನಿಗೆ ಹೋದರು. ಇತರ ಕೆಲವು ಜನರು ಪಾರಾನಿ
ನಲ್ಲಿ ಅವರೊಂದಿಗೆ ಸೇರಿಕೊಂಡರು. ನಂತರ ಇವರೆಲ್ಲಾ
ಒಟ್ಟಿಗೆ ಈಜಿಪ್ಟಿಗೆ ಹೋದರು. ಅವರು ಈಜಿಪ್ಟಿನ ರಾಜ
ನಾದ ಫರೋಹನ ಬಳಿಗೆ ಹೋಗಿ, ಅವನ ಸಹಾಯವನ್ನು
ಕೇಳಿದರು. ಫರೋಹನು ಹದದನಿಗೆ ಒಂದು ಮನೆಯನ್ನು
ಮತ್ತು ಸ್ವಲ್ಪ ಭೂಮಿಯನ್ನು ಕೊಟ್ಟನು. ಫರೋಹನು
ಅವನ ಊಟಕ್ಕಾಗಿ (ಪ್ರತಿ ತಿಂಗಳು) ಆಹಾರವನ್ನು
ಕೊಟ್ಟನು.

[19]ಫರೋಹನು ಹದದನನ್ನು ಬಹಳವಾಗಿ ಮೆಚ್ಚಿ
ಕೊಂಡನು. ಫರೋಹನು ತನ್ನ ನಾದಿನಿಯನ್ನೇ ಹದದನಿಗೆ
ಪತ್ನಿಯನ್ನಾಗಿ ಕೊಟ್ಟನು. (ರಾಣಿಯಾದ ತಹ್ಪೆನೇಸಳು
ಫರೋಹನ ಪತ್ನಿ.) [20]ತಹ್ಪೆನೇಸಳ ಸೋದರಿಯನ್ನು
ಹದದನು ಮದುವೆಯಾದನು. ಅವರಿಗೆ ಗೆನುಬತ್ ಎಂಬ
ಹೆಸರಿನ ಮಗನಿದ್ದನು. ಫರೋಹನ ಮನೆಯಲ್ಲಿಯೇ
ಅವನ ಮಕ್ಕಳೊಂದಿಗೆ ಗೆನುಬತನೂ ಬೆಳೆಯಲು ರಾಣಿ
ಯಾದ ತಹ್ಪೆನೇಸಳು ಅವಕಾಶಮಾಡಿದಳು.

---

**ಅಷ್ಟೋರೆತ್** ಜನರು ಮಕ್ಕಳನ್ನು ಪಡೆಯಲು ಈ ಮಿಥ್ಯಾದೇವತೆಯು ಅವರನ್ನು ಸಮರ್ಥರನ್ನಾಗಿಸುತ್ತಾಳೆಂದು ಕಾನಾನಿನ ಜನರು ನಂಬಿದ್ದರು. ಇವಳು ಅವರ ‘ಪ್ರೇಮದೇವತೆ’.

21ದಾವೀದನು ಸತ್ತುಹೋದನೆಂಬುದು ಹದದನಿಗೆ
ಈಜಿಪ್ಟಿನಲ್ಲಿ ತಿಳಿಯಿತು. ಸೈನ್ಯದ ಸೇನಾಪತಿಯಾದ
ಯೋವಾಬನು ಸತ್ತನೆಂಬುದೂ ಅವನಿಗೆ ತಿಳಿಯಿತು.
ಆದುದರಿಂದ ಹದದನು ಫರೋಹನಿಗೆ, ''ಸ್ವದೇಶದ ನನ್ನ
ಮನೆಗೆ ನನಗೆ ಹೋಗಲು ಬಿಡು'' ಎಂದು ಹೇಳಿದನು.
22ಆದರೆ ಫರೋಹನು ''ನಿನಗೆ ಬೇಕಾದುದ್ದೆಲ್ಲವನ್ನು
ನಾನು ಇಲ್ಲಿ ನಿನಗೆ ಕೊಟ್ಟಿದ್ದೇನೆ! ನೀನು ಸ್ವದೇಶಕ್ಕೆ
ಹಿಂದಿರುಗಿ ಹೋಗಲು ಅಪೇಕ್ಷಿಸುತ್ತಿರುವುದಾದರೂ
ಏಕೆ?'' ಎಂದು ಕೇಳಿದನು.

ಹದದನು, ''ದಯವಿಟ್ಟು ನನ್ನ ಮನೆಗೆ ನಾನು
ಹೋಗಲು ಬಿಡು'' ಎಂದನು.
23ಸೊಲೊಮೋನನಿಗೆ ವಿರುದ್ಧವಾಗಿ ಶತ್ರುವಾಗುವಂತೆ
ಇನ್ನೊಬ್ಬ ಮನುಷ್ಯನನ್ನೂ ದೇವರು ಪ್ರೇರೇಪಿಸಿದನು. ಈ
ಮನುಷ್ಯನು ಎಲ್ಯಾದಾವನ ಮಗನಾದ ರೆಜೋನ್
ಎಂಬವನು. ರೆಜೋನನು ತನ್ನ ಒಡೆಯನ ಹತ್ತಿರದಿಂದ
ಓಡಿಹೋಗಿದ್ದನು. ಚೋಬದ ರಾಜನಾದ ಹದದೆಜೆರನು
ಅವನ ಒಡೆಯ. 24ದಾವೀದನು ಚೋಬದ ಸೈನ್ಯವನ್ನು
ಸೋಲಿಸಿದ ಬಳಿಕ, ರೆಜೋನನು ಕೆಲವು ಜನರನ್ನು ಒಟ್ಟು
ಗೂಡಿಸಿಕೊಂಡು, ಆ ಕಿರುಸೇನೆಗೆ ತಾನೇ ನಾಯಕ
ನಾದನು. ರೆಜೋನನು ದಮಸ್ಕಕ್ಕೆ ಹೋಗಿ ಅಲ್ಲಿಯೇ
ನೆಲೆಸಿದನು. ರಜೋನನು ದಮಸ್ಕದ ರಾಜನಾದನು.
25ರೆಜೋನನು ಅರಾಮನ್ನು ಆಳಿದನು. ರೆಜೋನನು
ಇಸ್ರೇಲಿನ ದ್ವೇಷಿಯಾದ್ದರಿಂದ, ಸೊಲೊಮೋನನ ಜೀವ
ಮಾನದಲ್ಲೆಲ್ಲಾ ಅವನು ಇಸ್ರೇಲಿನ ಶತ್ರುವಾಗಿಯೇ
ಮುಂದುವರಿದನು. ರೆಜೋನ್ ಮತ್ತು ಹದದನು ಇಸ್ರೇ
ಲಿಗೆ ಹೆಚ್ಚು ತೊಂದರೆಯನ್ನು ಉಂಟುಮಾಡಿದರು.
26ಸೊಲೊಮೋನನ ಸೇವಕರಲ್ಲಿ ನೆಬಾಟನ ಮಗನಾದ
ಯಾರೊಬ್ಬಾಮನೂ ಒಬ್ಬನಾಗಿದ್ದನು. ಯಾರೊಬ್ಬಾ
ಮನೂ ಎಫ್ರಾಯೀಮ್ ಕುಲದವನು, ಅವನು ಚರೇದ
ಪಟ್ಟಣದವನು. ಯಾರೊಬ್ಬಾಮನ ತಾಯಿಯ ಹೆಸರು
ಜೆರೂಗ, ಆಕೆ ವಿಧವೆಯಾಗಿದ್ದಳು. ಯಾರೊಬ್ಬಾಮನು
ರಾಜನ ವಿರುದ್ಧ ತಿರುಗಿಬಿದ್ದನು.
27ಯಾರೊಬ್ಬಾಮನು ರಾಜನ ವಿರುದ್ಧ ಏಕೆ ತಿರುಗಿ
ಬಿದ್ದನೆಂಬ ಕಥೆಯು ಹೀಗಿದೆ: ಸೊಲೊಮೋನನು
ಮಿಲ್ಲೋ ಕೋಟೆಯನ್ನು ಕಟ್ಟುತ್ತಿದ್ದನು ಮತ್ತು ತನ್ನ ತಂದೆ
ಯಾದ ದಾವೀದನ ನಗರದ ಗೋಡೆಯನ್ನು ಭದ್ರಪಡಿಸು
ತ್ತಿದ್ದನು. 28ಯಾರೊಬ್ಬಾಮನು ಸಮರ್ಥನಾದ ಮನುಷ್ಯ
ನಾಗಿದ್ದನು. ಈ ಯುವಕನು ಒಳ್ಳೆಯ ಕೆಲಸಗಾರ
ನೆಂಬುದು ಸೊಲೊಮೋನನಿಗೆ ತಿಳಿಯಿತು. ಆದುದ
ರಿಂದ ಸೊಲೊಮೋನನು ಯೋಸೇಫ್ ಕುಲದ ಕೆಲಸ
ಗಾರರೆಲ್ಲರಿಗೂ ಮೇಲ್ವಿಚಾರಕನನ್ನಾಗಿ ಅವನನ್ನು ನೇಮಿ
ಸಿದನು. 29ಒಂದು ದಿನ ಯಾರೊಬ್ಬಾಮನು ಜೆರುಸ
ಲೇಮಿನ ಹೊರಗೆ ಹೋಗುತ್ತಿದ್ದನು. ಶೀಲೋವಿನ
ಪ್ರವಾದಿ ಯಾದ ಅಹೀಯನು ಅವನನ್ನು ರಸ್ತೆಯಲ್ಲಿ
ಸಂಧಿಸಿದನು. ಅಹೀಯನು ಹೊಸ ಅಂಗಿಯನ್ನು ಧರಿಸಿ
ದ್ದನು. ನಿರ್ಜನವಾಗಿದ್ದ ಆ ದೇಶದಲ್ಲಿ ಇವರಿಬ್ಬರೇ
ಇದ್ದರು. 30ಅಹೀಯನು ತನ್ನ ಹೊಸ ಅಂಗಿಯನ್ನು
ತೆಗೆದು, ಅದನ್ನು ಹನ್ನೆರಡು ಚೂರುಗಳನ್ನಾಗಿ ಹರಿದನು.
31ಬಳಿಕ ಅಹೀಯನು ಯಾರೊಬ್ಬಾಮನಿಗೆ, ''ಈ
ಅಂಗಿಯ ಹತ್ತು ಚೂರುಗಳನ್ನು ನಿನಗೋಸ್ಕರವಾಗಿ
ತೆಗೆದುಕೊ. ಇಸ್ರೇಲರ ದೇವರಾದ ಯೆಹೋವನು
ಇಂತೆನ್ನುತ್ತಾನೆ: ಸೊಲೊಮೋನನ ರಾಜ್ಯವನ್ನು ನಾನು
ಹರಿದು ಚೂರುಗಳನ್ನಾಗಿ ಮಾಡುತ್ತೇನೆ. ನಾನು ಹತ್ತು
ಕುಲಗಳನ್ನು ನಿನಗೆ ಒಪ್ಪಿಸುತ್ತೇನೆ. 32ಒಂದು ಕುಲವನ್ನು
ಮಾತ್ರ ದಾವೀದನ ವಂಶದ ವಂಶದ ಅಧೀನದಲ್ಲಿ
ಬಿಡುತ್ತೇನೆ. ಅವರು ಈ ಕುಲವನ್ನು ಉಳಿಸಿಕೊಳ್ಳಲು
ನಾನು ಅವಕಾಶ ಮಾಡಿಕೊಡುತ್ತೇನೆ. ನನ್ನ ಸೇವಕನಾದ
ದಾವೀದನಿಗಾಗಿ ಮತ್ತು ಜೆರುಸಲೇಮಿಗಾಗಿ ನಾನು
ಇದನ್ನು ಮಾಡುತ್ತೇನೆ. ಇಸ್ರೇಲಿನ ಎಲ್ಲಾ ಕುಲ
ಗಳಿಂದಲೂ ನಾನು ಜೆರುಸಲೇಮ್ ನಗರವನ್ನು ಆರಿಸಿ
ಕೊಂಡಿದ್ದೇನೆ. 33ಸೊಲೊಮೋನನು ನನ್ನನ್ನು ಅನುಸರಿ
ಸುವುದನ್ನು ನಿಲ್ಲಿಸಿದ ಕಾರಣ ನಾನು ಅವನ ರಾಜ್ಯವನ್ನು
ಅವನಿಂದ ತೆಗೆದುಕೊಳ್ಳುವೆನು. ಅವನು ಚೀದೋನ್ಯರ
ದೇವತೆಯಾದ ಅಷ್ಟೋರೆತಳನ್ನೂ ಮೋವಾಬ್ಯರ
ದೇವರಾದ ಕೆಮೋಷನನ್ನೂ ಅಮ್ಮೋನಿ ಯರ ದೇವರಾದ
ಮಿಲ್ಕೋಮನನ್ನೂ ಪೂಜಿಸಿದನು. ಸೊಲೊಮೋನನು
ತಾನು ಮಾಡುತ್ತಿದ್ದ ಸರಿಯಾದ ಮತ್ತು ಉತ್ತಮವಾದ
ಕಾರ್ಯಗಳನ್ನು ನಿಲ್ಲಿಸಿದನು. ಅವನು ನನ್ನ ಕಟ್ಟಳೆಗಳನ್ನು
ಮತ್ತು ಆಜ್ಞೆಗಳನ್ನು ಅನುಸರಿಸಲಿಲ್ಲ. ತನ್ನ ತಂದೆಯಾದ
ದಾವೀದನು ಜೀವಿಸಿದಂತೆ ಅವನು ಜೀವಿಸುತ್ತಿಲ್ಲ.
34ಆದುದರಿಂದ ನಾನು ಸೊಲೊಮೋನನ ಕುಟುಂಬ
ದಿಂದ ರಾಜ್ಯವನ್ನು ತೆಗೆದುಕೊಳ್ಳುತ್ತೇನೆ. ಆದರೆ
ಸೊಲೊಮೋನನು ತನ್ನ ಜೀವಮಾನವೆಲ್ಲಾ ಆಳುವಂತೆ
ನಾನು ಅವನಿಗೆ ಅವಕಾಶ ಕೊಡುತ್ತೇನೆ. ನಾನು ನನ್ನ
ಸೇವಕನಾದ ದಾವೀದನಿಗಾಗಿ ಇದನ್ನು ಮಾಡುತ್ತೇನೆ.
ನಾನು ದಾವೀದನನ್ನು ಆರಿಸಿಕೊಂಡೆನು; ಏಕೆಂದರೆ
ಅವನು ನನ್ನ ಕಟ್ಟಳೆಗಳನ್ನೂ ಆಜ್ಞೆಗಳನ್ನೂ ಅನುಸರಿ
ಸಿದನು. 35ಆದರೆ ನಾನು ರಾಜ್ಯವನ್ನು ಅವನ ಮಗನಿಂದ
ಕಿತ್ತುಕೊಂಡು ನಿನಗೆ ಹತ್ತು ಕುಲಗಳನ್ನು ಕೊಡುತ್ತೇನೆ.
36ಸೊಲೊಮೋನನ ಮಗನಿಗೆ ಒಂದು ಕುಲವನ್ನು ಮಾತ್ರ
ಕೊಡುತ್ತೇನೆ. ಜೆರುಸಲೇಮಿನ ನನ್ನ ಸನ್ನಿಧಿಯಲ್ಲಿ ಆಳಲು
ನನ್ನ ಸೇವಕನಾದ ದಾವೀದನು ಯಾವಾಗಲೂ ತನ್ನ
ಸಂತತಿಯವರಲ್ಲಿ ಒಬ್ಬನನ್ನು ಹೊಂದಿರಲೆಂದು ನಾನು
ಇದನ್ನು ಮಾಡುತ್ತೇನೆ. ಜೆರುಸಲೇಮ್ ನಗರವನ್ನು

ನಾನು ನನ್ನ ಸ್ವಂತದ್ದೆಂದು ಆರಿಸಿಕೊಂಡೆನು. 37ನಾನು
ನಿನ್ನನ್ನು ಇಡೀ ಇಸ್ರೇಲಿಗೆ ರಾಜನನ್ನಾಗಿ ಮಾಡುತ್ತೇನೆ.
ನೀನು ನಿನ್ನ ಇಷ್ಟಾನುಸಾರವಾಗಿ ಪ್ರತಿಯೊಂದರ ಮೇಲೆ
ದೊರೆತನ ಮಾಡುವಂತೆ ಮಾಡುತ್ತೇನೆ. 38ನೀನು ಸರಿ
ಯಾದ ಮಾರ್ಗದಲ್ಲಿ ಜೀವಿಸುತ್ತಾ, ನನ್ನ ಆಜ್ಞೆಗಳನ್ನು
ಅನುಸರಿಸಿದರೆ, ನಾನು ಈ ಕಾರ್ಯಗಳೆನ್ನೆಲ್ಲ ನಿನಗೆ
ಮಾಡುವೆನು. ನನ್ನ ಕಟ್ಟಳೆಗಳನ್ನೂ ಆಜ್ಞೆಗಳನ್ನೂ ನೀನು
ದಾವೀದನಂತೆ ಅನುಸರಿಸಿದರೆ ನಾನು ನಿನ್ನೊಂದಿಗೆ
ಇರುತ್ತೇನೆ. ನಾನು ನಿನ್ನ ಕುಟುಂಬವನ್ನು ದಾವೀದನ
ಕುಟುಂಬದಂತೆ ರಾಜರುಗಳ ಕುಟುಂಬವನ್ನಾಗಿ ಮಾಡು
ತ್ತೇನೆ. ನಾನು ನಿನಗೆ ಇಸ್ರೇಲನ್ನು ಕೊಡುತ್ತೇನೆ.
39ಸೊಲೊಮೋನನು ಮಾಡಿದ ಕಾರ್ಯಗಳ ನಿಮಿತ್ತ
ನಾನು ದಾವೀದನ ಮಕ್ಕಳನ್ನು ದಂಡಿಸುತ್ತೇನೆ. ಆದರೆ ನನ್ನ
ದಂಡನೆಯು ಅವರ ಮೇಲೆ ಶಾಶ್ವತವಾಗಿರುವುದಿಲ್ಲ''
ಎಂದು ಹೇಳಿದನು.

### ಸೊಲೊಮೋನನ ಮರಣ

40ಸೊಲೊಮೋನನು ಯಾರೊಬ್ಬಾಮನನ್ನು
ಕೊಲ್ಲಲು ಪ್ರಯತ್ನಿಸಿದನು. ಆದರೆ ಯಾರೊಬ್ಬಾಮನು
ಈಜಿಪ್ಟಿಗೆ ಓಡಿಹೋದನು. ಅವನು ಈಜಿಪ್ಟಿನ ರಾಜನಾದ
ಶೀಶಕನ ಬಳಿಗೆ ಹೋದನು. ಸೊಲೊಮೋನನು ಸಾಯು
ವವರೆಗೆ ಯಾರೊಬ್ಬಾಮನು ಅಲ್ಲಿಯೇ ನೆಲೆಸಿದನು.
41ಸೊಲೊಮೋನನು ತಾನು ಆಳುತ್ತಿದ್ದಾಗ ಅನೇಕ
ಮಹಾಕಾರ್ಯಗಳನ್ನೂ ಜ್ಞಾನದ ಕಾರ್ಯಗಳನ್ನೂ
ಮಾಡಿದನು. ಈ ಕಾರ್ಯಗಳನ್ನೆಲ್ಲ ಸೊಲೊಮೋನನ
ಚರಿತ್ರೆ ಎಂಬ ಪುಸ್ತಕದಲ್ಲಿ ಬರೆಯಲಾಗಿದೆ. 42ಸಮಸ್ತ
ಇಸ್ರೇಲನ್ನು ಸೊಲೊಮೋನನು ಜೆರುಸಲೇಮಿನಲ್ಲಿ ನಲ
ವತ್ತು ವರ್ಷಗಳ ಕಾಲ ಆಳಿದನು. 43ಬಳಿಕ ಸೊಲೊಮೋ
ನನು ಸತ್ತನು. ಅವನನ್ನು ಅವನ ಪೂರ್ವಿಕರ ಬಳಿ ಸಮಾಧಿ
ಮಾಡಿದರು. ಅವನನ್ನು ಅವನ ತಂದೆಯಾದ ದಾವೀದ
ನಗರದಲ್ಲಿ ಸಮಾಧಿಮಾಡಿದರು. ಸೊಲೊಮೋನನ
ಮಗನಾದ ರೆಹಬ್ಬಾಮನು ಸೊಲೊಮೋನನ ಬಳಿಕ
ರಾಜನಾದನು.

12 1-2ಸೊಲೊಮೋನನಿಂದ ಓಡಿ ಹೋಗಿದ್ದ
ನೆಬಾಟನ ಮಗನಾದ ಯಾರೊಬ್ಬಾಮನು ಇನ್ನು
ಈಜಿಪ್ಟಿನಲ್ಲಿಯೇ ಇದ್ದನು. ಸೊಲೊಮೋನನು ಸತ್ತು
ಹೋದ ಸುದ್ದಿಯನ್ನು ಕೇಳಿ ಅವನು ಎಫ್ರಾಯೀಮ್
ಬೆಟ್ಟದಲ್ಲಿರುವ ಜೆರೆಧ ಎಂಬ ಪಟ್ಟಣಕ್ಕೆ ಹಿಂದಿರುಗಿದನು.
ರಾಜನಾದ ಸೊಲೊಮೋನನು ಸತ್ತುಹೋದನು
ಮತ್ತು ಅವನನ್ನು ಅವನ ಪೂರ್ವಿಕರ ಬಳಿಯಲ್ಲಿ ಸಮಾಧಿ
ಮಾಡಿದರು. ಅನಂತರ ಅವನ ಮಗನಾದ ರೆಹಬ್ಬಾಮನು
ಹೊಸ ರಾಜನಾದನು. 3ಇಸ್ರೇಲಿನ ಜನರೆಲ್ಲರೂ ರೆಹಬ್ಬಾ
ಮನನ್ನು ರಾಜನನ್ನಾಗಿ ಮಾಡಲು ಶೆಕೆಮಿಗೆ ಹೋದರು.
ರೆಹಬ್ಬಾಮನೂ ರಾಜನಾಗಲು ಶೆಕೆಮಿಗೆ ಹೋದನು.
ಜನರು ರೆಹಬ್ಬಾಮನಿಗೆ, 4''ನಿನ್ನ ತಂದೆಯು ನಮ್ಮನ್ನು
ಹೆಚ್ಚು ಕಷ್ಟದ ಕೆಲಸ ಮಾಡಲು ಬಲಾತ್ಕರಿಸಿದನು. ಈಗ
ನೀನು ನಮಗೆ ಅದನ್ನು ಕಡಿಮೆಗೊಳಿಸು, ನಿನ್ನ ತಂದೆಯು
ನಮ್ಮನ್ನು ಬಲಾತ್ಕರಿಸಿ ಮಾಡಿಸುತ್ತಿದ್ದ ಹೆಚ್ಚು ಕೆಲಸಗಳನ್ನು
ನಿಲ್ಲಿಸು. ಆಗ ನಾವು ನಿನ್ನ ಸೇವೆಯನ್ನು ಮಾಡುವೆವು''
ಎಂದು ಹೇಳಿದರು.
5ರೆಹಬ್ಬಾಮನು, ''ಮೂರು ದಿನಗಳಾದ ಮೇಲೆ ನನ್ನ
ಬಳಿಗೆ ಹಿಂದಿರುಗಿ ಬನ್ನಿ, ನಾನು ನಿಮಗೆ ಉತ್ತರವನ್ನು
ಹೇಳುತ್ತೇನೆ'' ಎಂದನು. ಆದುದರಿಂದ ಜನರು
ಹೊರಟುಹೋದರು.
6ಸೊಲೊಮೋನನ ಕಾಲದಲ್ಲಿ ತೀರ್ಮಾನಗಳನ್ನು
ತೆಗೆದುಕೊಳ್ಳಲು ಸಹಾಯ ಮಾಡುತ್ತಿದ್ದ ಕೆಲವು
ಹಿರಿಯರು ಅಲ್ಲಿದ್ದರು. ರಾಜನಾದ ರೆಹಬ್ಬಾಮನು
ಅವರಿಗೆ, ''ನಾನು ಈ ಜನರಿಗೆ ಉತ್ತರ ಹೇಳಲೇಬೇಕು.
ನಾನು ಏನು ಹೇಳಲಿ? ನಿಮ್ಮ ಆಲೋಚನೆಯೇನು?''
ಎಂದು ಕೇಳಿದನು.
7ಆ ಹಿರಿಯರು, ''ಇಂದು ನೀನು ಅವರಿಗೆ ಸೇವಕನಂತೆ
ಇರುವುದಾದರೆ, ಅವರು ನಿನ್ನ ಸೇವೆಯನ್ನು ನಿಜ
ವಾಗಿಯೂ ಮಾಡುತ್ತಾರೆ. ನೀನು ಅವರೊಂದಿಗೆ ಕರುಣೆ
ಯಿಂದ ಮಾತಾಡಿದರೆ, ಅವರು ಎಂದೆಂದಿಗೂ ನಿನಗಾಗಿ
ದುಡಿಯುತ್ತಾರೆ'' ಎಂದರು.
8ಆದರೆ ರೆಹಬ್ಬಾಮನು ಈ ಸಲಹೆಗೆ ಕಿವಿಗೊಡಲಿಲ್ಲ.
ಅವನು ತನ್ನ ಸ್ನೇಹಿತರಾದ ಯುವಜನರಿಗೆ, 9''ಈ ಜನರು,
'ನಿನ್ನ ತಂದೆ ಕೊಟ್ಟ ಕೆಲಸಕ್ಕಿಂತಲೂ ಸುಲಭವಾದ ಕೆಲಸ
ವನ್ನು ನಮಗೆ ಕೊಡು' ಎಂದು ಕೇಳುತ್ತಿದ್ದಾರೆ. 'ಈ
ಜನರಿಗೆ ನಾನು ಉತ್ತರವನ್ನು ಹೇಳಲೇಬೇಕು. ಈ
ವಿಷಯದಲ್ಲಿ ನಿಮ್ಮ ಆಲೋಚನೆಯೇನು? ನಾನು
ಅವರಿಗೆ ಏನು ಹೇಳ ಬೇಕು?''' ಎಂದು ಕೇಳಿದನು.
10ರಾಜನ ಸ್ನೇಹಿತರಾದ ಯುವಕರು, ''ಆ ಜನರು ನಿನ್ನ
ಬಳಿಗೆ ಬಂದು, 'ನಿನ್ನ ತಂದೆಯು ಬಲಾತ್ಕರಿಸಿ ಹೆಚ್ಚು
ಕಷ್ಟದ ಕೆಲಸಗಳನ್ನು ಮಾಡಿಸಿದನು. ಈಗ ನಮ್ಮ ಕೆಲಸ
ವನ್ನು ಸುಲಭಗೊಳಿಸು' ಎಂದು ಹೇಳಿದರು. ಆದ್ದರಿಂದ
ನೀನು ಜಂಭದಿಂದ ಅವರಿಗೆ,'ನನ್ನ ಕಿರುಬೆರಳು ನನ್ನ
ತಂದೆಯ ಪೂರ್ಣದೇಹಕ್ಕಿಂತ ಶಕ್ತಿಯುಳ್ಳದ್ದಾಗಿದೆ.
11ನನ್ನ ತಂದೆಯು ಹೆಚ್ಚು ಕಷ್ಟದ ಕೆಲಸಗಳನ್ನು ಮಾಡಲು
ನಿಮ್ಮನ್ನು ಬಲಾತ್ಕರಿಸಿದನು. ಆದರೆ ನಾನು ಮತ್ತಷ್ಟು
ಕಷ್ಟದ ಕೆಲಸಗಳನ್ನು ನಿಮ್ಮಿಂದ ಮಾಡಿಸುತ್ತೇನೆ. ನಿಮ್ಮಿಂದ
ಕೆಲಸ ಮಾಡಿಸಲು ನಮ್ಮ ತಂದೆಯು ಚಾವಟಿಗಳಿಂದ
ನಿಮ್ಮನ್ನು ಹೊಡೆಸಿದನು. ನಾನಾದರೋ ನಿಮ್ಮನ್ನು
ಮುಳ್ಳುಕೋಲುಗಳಿಂದ ಮತ್ತಷ್ಟು ಕಠಿಣವಾಗಿ ಹೊಡೆಸು
ತ್ತೇನೆ' ಎಂದು ತಿಳಿಸು'' ಎಂಬುದಾಗಿ ಹೇಳಿಕೊಟ್ಟರು.

12ರೆಹಬ್ಬಾಮನು ಜನರಿಗೆ, ''ಮೂರು ದಿನಗಳ ನಂತರ
ನನ್ನ ಬಳಿಗೆ ಮತ್ತೆ ಬನ್ನಿ'' ಎಂದು ಹೇಳಿದ್ದನು. ಮೂರು
ದಿನಗಳ ನಂತರ ಇಸ್ರೇಲಿನ ಜನರೆಲ್ಲರೂ ರೆಹಬ್ಬಾಮನ
ಬಳಿಗೆ ಬಂದರು. 13ಆ ಸಮಯದಲ್ಲಿ, ರೆಹಬ್ಬಾಮನು ಅವ
ರೊಂದಿಗೆ ಕಠಿಣವಾಗಿ ಮಾತನಾಡಿದನು. ಹಿರಿಯರು
ನೀಡಿದ ಸಲಹೆಗೆ ಅವನು ಕಿವಿಗೊಡಲಿಲ್ಲ. 14ತನ್ನ
ಸ್ನೇಹಿತರು ತಿಳಿಸಿದಂತೆಯೇ ಅವನು ಮಾಡಿದನು.
ರೆಹಬ್ಬಾಮನು, ''ನನ್ನ ತಂದೆಯು ಕಷ್ಟದ ಕೆಲಸಗಳನ್ನು
ಮಾಡಲು ನಿಮ್ಮನ್ನು ಬಲಾತ್ಕರಿಸಿದನು. ನಾನು ನಿಮಗೆ
ಮತ್ತಷ್ಟು ಹೆಚ್ಚು ಕೆಲಸವನ್ನು ಕೊಡುತ್ತೇನೆ. ನನ್ನ
ತಂದೆಯು ಬಾರುಕೋಲಿನಿಂದ ನಿಮ್ಮನ್ನು ಹೊಡೆಸಿದನು.
ಆದರೆ ನಾನು ನಿಮ್ಮನ್ನು ಮತ್ತಷ್ಟು ಕಠಿಣವಾಗಿ ಮುಳ್ಳು
ಕೋಲುಗಳಿಂದ ಹೊಡೆಸುತ್ತೇನೆ'' ಎಂದು ಹೇಳಿದನು.
15ರಾಜನು ಜನರ ಅಪೇಕ್ಷೆಯನ್ನು ನೆರವೇರಿಸಲಿಲ್ಲ.
ನೆಬಾಟನ ಮಗನಾದ ಯಾರೊಬ್ಬಾಮನಿಗೆ ತಾನು
ಮಾಡಿದ್ದ ವಾಗ್ದಾನವನ್ನು ಈಡೇರಿಸಲು ಯೆಹೋವನೇ
ಹೀಗೆ ಮಾಡಿದನು. ಯೆಹೋವನು ಪ್ರವಾದಿಯಾದ
ಅಹೀಯನ ಮೂಲಕ ಈ ವಾಗ್ದಾನವನ್ನು ಮಾಡಿದ್ದನು.
ಅಹೀಯನು ಶೀಲೋವಿನವನು.

16ಇಸ್ರೇಲಿನ ಜನರೆಲ್ಲರೂ ಹೊಸರಾಜನು ತಮ್ಮ
ಮಾತಿಗೆ ಕಿವಿಗೂಡಲಿಲ್ಲವೆಂಬುದನ್ನು ನೋಡಿದರು.
ಆದುದರಿಂದ ಜನರೆಲ್ಲರೂ ರಾಜನಿಗೆ, ''ದಾವೀದನ
ಕುಟುಂಬದಲ್ಲಿ ನಾವೆಲ್ಲರೂ ಭಾಗಿಗಳೇ? ಇಲ್ಲ!
ಇಷಯನ ಭೂಮಿಯಲ್ಲಿ ನಮಗೇನಾದರೂ ಪಾಲು
ಸಿಕ್ಕುತ್ತದೆಯೇ? ಇಲ್ಲ! ಇಸ್ರೇಲರೇ, ನಮ್ಮ ಮನೆಗಳಿಗೆ
ನಾವು ಹೋಗೋಣ ನಡೆಯಿರಿ. ದಾವೀದನ ಮಗನು
ತನ್ನ ಜನರನ್ನು ತಾನೇ ಆಳಲಿ!'' ಎಂದು ಹೇಳಿದರು.
ಇಸ್ರೇಲಿನ ಜನರೆಲ್ಲರೂ ಮನೆಗಳಿಗೆ ಹೋದರು.
17ಆದರೆ ರೆಹಬ್ಬಾಮನು ಯೆಹೂದನಗರಗಳಲ್ಲಿ ವಾಸ
ವಾಗಿದ್ದ ಇಸ್ರೇಲರನ್ನು ಆಳಿದನು.

18ಅದೋರಾಮನೆಂಬ ಹೆಸರಿನ ಮನುಷ್ಯನು ಕೆಲಸ
ಗಾರರ ಮೇಲ್ವಿಚಾರಕನಾಗಿದ್ದನು. ರಾಜನಾದ ರೆಹಬ್ಬಾ
ಮನು ಜನರೊಂದಿಗೆ ಮಾತನಾಡಲು ಅದೋರಾಮ
ನನ್ನು ಕಳುಹಿಸಿದನು. ಆದರೆ ಇಸ್ರೇಲಿನ ಜನರು ಅವನು
ಸಾಯುವವರೆಗೆ ಅವನ ಕಡೆಗೆ ಕಲ್ಲುಗಳನ್ನು ಎಸೆದರು.
ಆಗ ರೆಹಬ್ಬಾಮನು ತನ್ನ ರಥವನ್ನು ಹತ್ತಿ ತಪ್ಪಿಸಿಕೊಂಡು,
ಜೆರುಸಲೇಮಿಗೆ ಓಡಿಹೋದನು. 19ಹೀಗೆ ದಾವೀದನ
ಕುಟುಂಬಕ್ಕೆ ವಿರೋಧವಾಗಿ ಇಸ್ರೇಲರು ದಂಗೆ ಎದ್ದರು.
ಅವರು ಇಂದಿಗೂ ದಾವೀದನ ಕುಟುಂಬದ ವಿರೋಧಿ
ಗಳಾಗಿದ್ದಾರೆ.

20ಯಾರೊಬ್ಬಾಮನು ಹಿಂದಿರುಗಿ ಬಂದಿದ್ದಾನೆ
ಎಂಬುದು ಇಸ್ರೇಲಿನ ಜನರೆಲ್ಲರಿಗೂ ತಿಳಿಯಿತು. ಅವರು
ಅವನನ್ನು ಒಂದು ಸಭೆಗೆ ಕರೆಸಿ, ಅವನನ್ನು ಇಸ್ರೇಲಿನ
ರಾಜನನ್ನಾಗಿ ನೇಮಿಸಿದರು. ಯೆಹೂದಕುಲವೊಂದು
ಮಾತ್ರ ದಾವೀದನ ಕುಟುಂಬವನ್ನು ಅನುಸರಿಸಿತು.

21ರೆಹಬ್ಬಾಮನು ಜೆರುಸಲೇಮಿಗೆ ಹಿಂದಿರುಗಿ
ಹೋದನು. ಅವನು ಯೆಹೂದದ ಕುಟುಂಬಗಳನ್ನು
ಮತ್ತು ಬೆನ್ಯಾಮೀನ್ ಕುಟುಂಬಗಳನ್ನು ಒಟ್ಟಾಗಿ ಸೇರಿ
ಸಿದನು. ಅವರಲ್ಲಿ ಒಂದು ಲಕ್ಷದ ಎಂಭತ್ತು ಸಾವಿರ ಸೈನಿಕ
ರಿದ್ದರು. ರೆಹಬ್ಬಾಮನು ಇಸ್ರೇಲಿನ ಜನರ ವಿರುದ್ಧ
ಯುದ್ಧಮಾಡಲು ಅಪೇಕ್ಷಿಸಿದನು. ಅವನು ತನ್ನ
ರಾಜ್ಯವನ್ನು ಪುನರ್‌ಸ್ಥಾಪಿಸಬೇಕೆಂದಿದ್ದನು.

22ಆದರೆ ಯೆಹೋವನು ದೇವರ ಮನುಷ್ಯನೊಬ್ಬ
ನೊಡನೆ ಮಾತನಾಡಿದನು. ಅವನ ಹೆಸರು ಶೆಮಾಯ.
ಯೆಹೋವನು, 23''ಯೆಹೂದದ ರಾಜನೂ ಸೊಲೊ
ಮೋನನ ಮಗನೂ ಆದ ರೆಹಬ್ಬಾಮನೊಂದಿಗೆ,
ಯೆಹೂದ ಮತ್ತು ಬೆನ್ಯಾಮೀನ್ ಜನರೆಲ್ಲರೊಂದಿಗೆ
ಮಾತನಾಡು. 24ನೀನು ಅವರಿಗೆ, 'ನಿಮ್ಮ ಸೋದರರಾದ
ಇಸ್ರೇಲರ ವಿರುದ್ಧ ನೀವು ಯುದ್ಧಕ್ಕೆ ಹೋಗಲೇ
ಬಾರದೆಂದು ಯೆಹೋವನು ಹೇಳುತ್ತಾನೆ. ನಿಮ್ಮಲ್ಲಿ ಪ್ರತಿ
ಯೊಬ್ಬನು ಮನೆಗೆ ಹೋಗಬೇಕು. ಈ ಸಂಗತಿಗಳೆಲ್ಲ
ಸಂಭವಿಸುವಂತೆ ನಾನೇ ಮಾಡಿದೆನು' ಎಂದು ಹೇಳು''
ಎಂಬುದಾಗಿ ತಿಳಿಸಿದನು. ಆದುದರಿಂದ ರೆಹಬ್ಬಾಮನ
ಸೈನ್ಯದಲ್ಲಿನ ಜನರೆಲ್ಲರೂ ಯೆಹೋವನ ಆಜ್ಞೆಯನ್ನು
ಅನುಸರಿಸಿದರು. ಅವರು ತಮ್ಮ ಮನೆಗಳಿಗೆ ಹೋದರು.

25ಎಫ್ರಾಯೀಮ್ ಬೆಟ್ಟದ ಸೀಮೆಯಲ್ಲಿ ಶೆಕೆಮ್
ನಗರವಿತ್ತು. ಯಾರೊಬ್ಬಾಮನು ಶೆಕೆಮನ್ನು ಒಂದು
ಬಲಾಢ್ಯ ನಗರವನ್ನಾಗಿಸಿಕೊಂಡು ಅಲ್ಲಿ ನೆಲೆಸಿದನು.
ತರುವಾಯ ಅವನು ಪೆನೂವೇಲ್ ನಗರಕ್ಕೆ ಹೋಗಿ
ಅದನ್ನು ಬಲಪಡಿಸಿದನು.

26-27ಯಾರೊಬ್ಬಾಮನು ತನ್ನಲ್ಲೇ, ''ಜನರು ಜೆರುಸ
ಲೇಮಿನಲ್ಲಿರುವ ಯೆಹೋವನ ಆಲಯಕ್ಕೆ ಹೋಗುವು
ದನ್ನೇ ಮುಂದುವರಿಸಿದರೆ, ಆಗ ಅವರು ದಾವೀದನ
ಕುಟುಂಬವೇ ನಮ್ಮನ್ನು ಆಳಲಿ ಎಂದು ಅಪೇಕ್ಷೆಪಡ
ಬಹುದು. ಜನರು ಯೆಹೂದದ ರಾಜನಾದ ರೆಹಬ್ಬಾಮ
ನನ್ನೇ ಮತ್ತೆ ಅನುಸರಿಸಬಹುದು. ನಂತರ ಅವರು ನನ್ನನ್ನು
ಕೊಂದು ಬಿಡಬಹುದು.'' ಅಂದುಕೊಂಡನು. 28ಬಳಿಕ
ರಾಜನು ಈಗ ತಾನೇನು ಮಾಡಬೇಕೆಂದು ತನ್ನ ಸಲಹೆ
ಗಾರರನ್ನು ಕೇಳಿದನು. ಅವರು ತಮ್ಮ ಸಲಹೆಯನ್ನು
ಅವನಿಗೆ ನೀಡಿದರು. ಯಾರೊಬ್ಬಾಮನು ಎರಡು ಬಂಗಾ
ರದ ಕರುಗಳನ್ನು ಮಾಡಿಸಿ ಜನರಿಗೆ, ''ನೀವು ಆರಾಧಿಸಲು
ಜೆರುಸಲೇಮಿಗೆ ಹೋಗಲೇಬಾರದು. ಇಸ್ರೇಲರೇ,
ನಿಮ್ಮನ್ನು ಈಜಿಪ್ಟಿನಿಂದ ಹೊರತಂದ ದೇವರುಗಳು
ಇಲ್ಲಿವೆ'' ಎಂದು ಹೇಳಿದನು. 29ರಾಜನಾದ

ಯಾರೊಬ್ಬಾಮನು ಒಂದು ಬಂಗಾರದ ಕರುವನ್ನು
ಬೇತೇಲಿನಲ್ಲಿರಿಸಿದನು; ಮತ್ತೊಂದು ಬಂಗಾರದ ಕರು
ವನ್ನು ದಾನ್ ನಗರದಲ್ಲಿರಿಸಿದನು. [30]ಆದರೆ ಇದು ಮಹಾ
ಪಾಪವಾಗಿತ್ತು. ಇಸ್ರೇಲಿನ ಜನರು ಕರುಗಳನ್ನು ಆರಾಧಿ
ಸಲು ಬೇತೇಲ್ ಮತ್ತು ದಾನ್ ನಗರಗಳಿಗೆ ಪ್ರಯಾಣ
ಮಾಡಿದರು. [31]ಯಾರೊಬ್ಬಾಮನು ಎತ್ತರದ ಸ್ಥಳಗಳಲ್ಲಿ
ಆಲಯಗಳನ್ನು ನಿರ್ಮಿಸಿದನು. ಅವನು ಇಸ್ರೇಲಿನ ಬೇರೆ
ಬೇರೆ ಕುಲಗಳಿಂದ ಯಾಜಕರನ್ನು ಆರಿಸಿಕೊಂಡನು.
(ಅವನು ಲೇವಿಯರ ಕುಲವೊಂದರಿಂದಲೇ ಯಾಜಕ
ರನ್ನು ಆರಿಸಿಕೊಳ್ಳಲಿಲ್ಲ.) [32]ರಾಜನಾದ ಯಾರೊಬ್ಬಾ
ಮನು ಹೊಸಹಬ್ಬದ ದಿನವನ್ನು ಆರಂಭಿಸಿದನು. ಈ
ಹಬ್ಬವು ಯೆಹೂದ್ಯರ ಪಸ್ಕಹಬ್ಬದಂತಿತ್ತು.* ಆದರೆ ಈ
ಹಬ್ಬವು ಎಂಟನೆಯ ತಿಂಗಳ ಹದಿನೈದನೆಯ ದಿವಸ
ವಾಗಿತ್ತು. ಆ ಸಂದರ್ಭದಲ್ಲಿ ರಾಜನು ಬೇತೇಲ್
ನಗರದಲ್ಲಿ ಯಜ್ಞವೇದಿಕೆಯ ಮೇಲೆ ಯಜ್ಞಗಳನ್ನು
ಅರ್ಪಿಸಿದನು. ಅವನು ತಾನೇ ನಿರ್ಮಿಸಿದ ಕರುಗಳಿಗೆ
ಯಜ್ಞಗಳನ್ನು ಅರ್ಪಿಸಿದನು. ರಾಜನಾದ ಯೊರೊಬ್ಬಾ
ಮನು ತಾನು ನಿರ್ಮಿಸಿದ ಎತ್ತರದ ಸ್ಥಳಗಳಲ್ಲಿ ಸೇವೆ
ಮಾಡಲು ಯಾಜಕರನ್ನು ಬೇತೇಲ್‌ನಲ್ಲಿಯೇ ಆರಿಸಿ
ಕೊಂಡನು. [33]ರಾಜನಾದ ಯಾರೊಬ್ಬಾಮನು ಇಸ್ರೇಲ
ರಿಗೆ ತನ್ನದೇ ಆದ ಹಬ್ಬದ ದಿನವನ್ನು ಆರಿಸಿಕೊಂಡನು.
ಅದು ಎಂಟನೆಯ ತಿಂಗಳ ಹದಿನೈದನೆಯ ದಿವಸವಾಗಿತ್ತು.
ಆ ಸಮಯದಲ್ಲಿ ಅವನು ತಾನು ನಿರ್ಮಿಸಿದ ಯಜ್ಞವೇದಿ
ಕೆಯ ಮೇಲೆ ಯಜ್ಞಗಳನ್ನು ಮತ್ತು ಧೂಪವನ್ನು
ಅರ್ಪಿಸಿದನು . ಇದು ಬೇತೇಲ್ ನಗರದಲ್ಲಿ ನಡೆಯಿತು.

### ಬೇತೇಲಿಗೆ ದೇವರ ಶಾಪ

13 ಯೆಹೂದ ದೇಶದವನಾದ ಒಬ್ಬ ದೇವ
ಮನುಷ್ಯನು ಯೆಹೋವನ ಆಜ್ಞೆಯಂತೆ
ಬೇತೇಲಿಗೆ ಬಂದನು. ಆಗ ಯಾರೊಬ್ಬಾಮನು ಧೂಪ
ವನ್ನು ಅರ್ಪಿಸುತ್ತಾ, ಯಜ್ಞವೇದಿಕೆಯ ಹತ್ತಿರ ನಿಂತಿದ್ದನು.
[2]ಯಜ್ಞವೇದಿಕೆಯ ವಿರುದ್ಧ ಮಾತನಾಡುವಂತೆ ಆ
ದೇವಮನುಷ್ಯನಿಗೆ ಯೆಹೋವನು ಆಜ್ಞಾಪಿಸಿದನು. ಆಗ
ಅವನು ಹೇಳಿದ್ದೇನೆಂದರೆ:

‘‘ಯಜ್ಞವೇದಿಕೆಯೇ, ಯೆಹೋವನು ನಿನಗೆ ಇಂತೆನ್ನು
ತ್ತಾನೆ: ‘ದಾವೀದನ ವಂಶದಲ್ಲಿ ಯೋಷೀಯನೆಂಬ
ಮಗನು ಹುಟ್ಟುವನು. ಈಗ ಈ ಪೂಜಾಸ್ಥಳಗಳಲ್ಲಿ ಧೂಪ
ಸುಡುತ್ತಿರುವ ಈ ಯಾಜಕರನ್ನು ಅವನು ಹಿಡಿದು
ಅವರನ್ನು ನಿನ್ನ ಮೇಲೆಯೇ ಕೊಲ್ಲುವನು; ಈಗ ನಿನ್ನ
ಮೇಲೆ ಧೂಫ ಸುಡುತ್ತಿರುವ ಯಾಜಕರನ್ನು ಅವನು
ಹಿಡಿದು ಅವರ ಮೂಳೆಗಳನ್ನು ನಿನ್ನ ಮೇಲೆ ಸುಡುವನು.’’
[3]ಇದಲ್ಲದೆ ದೇವಮನುಷ್ಯನು ಜನರಿಗೆ, ‘‘ಯೆಹೋವನು
ಇದರ ಬಗ್ಗೆ ನನಗೆ ಹೇಳಿರುವ ಗುರುತೇನೆಂದರೆ, ‘ಯಜ್ಞ
ವೇದಿಕೆಯು ಒಡೆದು ಹೋಳಾಗುವುದು, ಬೂದಿಯು
ನೆಲದ ಮೇಲೆ ಚೆಲ್ಲಿ ಹೋಗುವುದು’’ ಎಂದನು.

[4]ಬೇತೇಲಿನ ಯಜ್ಞವೇದಿಕೆಯನ್ನು ಕುರಿತು ದೇವ
ಮನುಷ್ಯನು ಹೇಳಿದ ಸಂದೇಶವು ರಾಜನಾದ
ಯಾರೊಬ್ಬಾಮನಿಗೆ ಕೇಳಿಸಿತು. ಅವನು ತನ್ನ ಕೈಯನ್ನು
ಯಜ್ಞವೇದಿಕೆಯಿಂದ ಥಟ್ಟನೆ ತೆಗೆದು, ಆ ಮನುಷ್ಯನ
ಕಡೆಗೆ ಗುರಿಮಾಡಿ, ‘‘ಆ ಮನುಷ್ಯನನ್ನು ಹಿಡಿಯಿರಿ!’’
ಎಂದು ಹೇಳಿದನು. ಆದರೆ ರಾಜನು ಇದನ್ನು ಹೇಳಿದಾಗ,
ಅವನ ಕೈಗೆ ಲಕ್ವ ಹೊಡೆಯಿತು. ಅವನು ಅದನ್ನು ಚಲಿಸ
ಲಾಗಲಿಲ್ಲ, [5]ಯಜ್ಞವೇದಿಕೆಯೂ ಒಡೆದು ಚೂರಾ
ಯಿತು. ಅದರ ಮೇಲಿನ ಬೂದಿಯು ನೆಲದ ಮೇಲೆ ಚೆಲ್ಲಿ
ಹೋಯಿತು. ದೇವರೇ ಆಜ್ಞಾಪಿಸಿದನೆಂದು ದೇವ
ಮನುಷ್ಯನು ಹೇಳಿದ ಸಂಗತಿಗಳಿಗೆ ಇದೇ ಗುರುತಾಗಿತ್ತು.
[6]ನಂತರ ರಾಜನಾದ ಯಾರೊಬ್ಬಾಮನು ದೇವಮನುಷ್ಯ
ನಿಗೆ, ‘‘ನಿನ್ನ ದೇವರಾದ ಯೆಹೋವನಲ್ಲಿ ನನಗಾಗಿ
ಪ್ರಾರ್ಥಿಸು. ನನ್ನ ಕೈಯನ್ನು ಗುಣಪಡಿಸುವಂತೆ
ಯೆಹೋವನಲ್ಲಿ ಪ್ರಾರ್ಥಿಸು’’ ಎಂದನು.

ದೇವಮನುಷ್ಯನು ಯೆಹೋವನಿಗೆ ಪ್ರಾರ್ಥಿಸಿದನು.
ಆಗ ರಾಜನ ಕೈ ಗುಣವಾಯಿತು. ಅದು ಮತ್ತೆ ಮೊದಲಿ
ನಂತೆ ಆಯಿತು. [7]ಆಗ ರಾಜನು ದೇವಮನುಷ್ಯ
ನಿಗೆ,‘‘ದಯವಿಟ್ಟು ನನ್ನೊಡನೆ ಮನೆಗೆ ಬಾ. ನನ್ನೊಡನೆ
ಊಟಮಾಡು. ನಾನು ನಿನಗೆ ಒಂದು ಕಾಣಿಕೆಯನ್ನು
ಕೊಡುತ್ತೇನೆ’’ ಎಂದು ಹೇಳಿದನು.

[8]ಆದರೆ ದೇವಮನುಷ್ಯನು ರಾಜನಿಗೆ,‘‘ನಾನು ನಿನ್ನೊ
ಡನೆ ಮನೆಗೆ ಬರುವುದಿಲ್ಲ! ನೀನು ನಿನ್ನ ಅರ್ಧರಾಜ್ಯವನ್ನು
ಕೊಟ್ಟರೂ ನಾನು ಬರುವುದಿಲ್ಲ! ನಾನು ಈ ಸ್ಥಳದಲ್ಲಿ
ಏನನ್ನೂ ತಿನ್ನುವುದಿಲ್ಲ ಮತ್ತು ಕುಡಿಯುವುದಿಲ್ಲ. [9]ನಾನು
ಏನನ್ನೂ ತಿನ್ನಬಾರದು ಮತ್ತು ಕುಡಿಯಬಾರದೆಂದು
ಯೆಹೋವನು ನನಗೆ ಆಜ್ಞಾಪಿಸಿದ್ದಾನೆ. ನಾನು ಇಲ್ಲಿಗೆ
ಬಂದ ರಸ್ತೆಯಲ್ಲಿ ಮತ್ತೆ ಹಿಂದಿರುಗಿ ಹೋಗಬಾರದೆಂದು
ಯೆಹೋವನು ನನಗೆ ಆಜ್ಞಾಪಿಸಿದ್ದಾನೆ’’ ಎಂದು ಹೇಳಿ
ದನು. [10]ಆದುದರಿಂದ ಅವನು ಬೇರೆ ರಸ್ತೆಯಲ್ಲಿ
ಹೋದನು. ಅವನು ಬೇತೇಲಿಗೆ ಬಂದ ರಸ್ತೆಯಲ್ಲಿ ಮತ್ತೆ
ಹಿಂದಿರುಗಿ ಹೋಗಲಿಲ್ಲ.

[11]ಬೇತೇಲಿನಲ್ಲಿ ಒಬ್ಬ ವಯಸ್ಸಾದ ಪ್ರವಾದಿಯು
ನೆಲೆಸಿದ್ದನು. ಬೇತೇಲಿನಲ್ಲಿ ದೇವಮನುಷ್ಯನು ಮಾಡಿ
ದ್ದನ್ನು ಅವನ ಮಕ್ಕಳು ಬಂದು ಅವನಿಗೆ ಹೇಳಿದರು. ದೇವ
ಮನುಷ್ಯನು ರಾಜನಾದ ಯಾರೊಬ್ಬಾಮನಿಗೆ ಹೇಳಿದು
ದನ್ನು ಅವರು ತಮ್ಮ ತಂದೆಗೆ ಹೇಳಿದರು. [12]ಹಳೆಯ

---

**ಯೆಹೂದ್ಯರ ಹಬ್ಬ** ದೇವರು ಈಜಿಪ್ಟಿನಲ್ಲಿ ಯೆಹೂದ್ಯರನ್ನು ಸಂರಕ್ಷಿಸಿದುದರ ಸ್ಮಾರಕವಾಗಿ ಆಚರಿಸುವ ಒಂದು ಹಬ್ಬ.

ಪ್ರವಾದಿಯು, ''ಅವನು ಬಿಟ್ಟುಹೋಗುವಾಗ ಯಾವ ರಸ್ತೆಯಲ್ಲಿ ಹೋದನು?'' ಎಂದು ಕೇಳಿದನು. ಯೆಹೂದ ದೇಶದವನಾದ ದೇವರ ಮನುಷ್ಯನು ಯಾವ ರಸ್ತೆಯಲ್ಲಿ ಹಿಂದಿರುಗಿ ಹೋದನೆಂಬುದನ್ನು ಅವನ ಮಕ್ಕಳು ತಂದೆಗೆ ತೋರಿಸಿದರು.
13ಆ ಪ್ರವಾದಿಯು ತನ್ನ ಕತ್ತೆಯ ಮೇಲೆ ತಡಿಯೊಂದನ್ನು ಹಾಕಲು ಮಕ್ಕಳಿಗೆ ಹೇಳಿದನು. ಅವರು ಕತ್ತೆಯ ಮೇಲೆ ತಡಿಯನ್ನು ಹಾಕಿದರು. ಆಗ ಆ ಪ್ರವಾದಿಯು ತನ್ನ ಕತ್ತೆಯ ಮೇಲೆ ಹೋದನು.

14ಆ ಪ್ರವಾದಿಯು ದೇವ ಮನುಷ್ಯನನ್ನು ಹಿಂಬಾಲಿಸಿ ಹೋಗಿ ಓಕ್ ಮರದ ಕೆಳಗೆ ಕುಳಿತಿದ್ದ ಅವನನ್ನು ಕಂಡು, ''ನೀನು ಯೆಹೂದದಿಂದ ಬಂದ ದೇವಮನುಷ್ಯನೇ?'' ಎಂದು ಕೇಳಿದನು.

ದೇವಮನುಷ್ಯನು, ''ಹೌದು, ನಾನೇ'' ಎಂದನು.

15ಹಳೆಯ ಪ್ರವಾದಿಯು, ''ದಯವಿಟ್ಟು ಮನೆಗೆ ಬಂದು ನನ್ನೊಂದಿಗೆ ಊಟಮಾಡು'' ಎಂದನು.

16ಆದರೆ ದೇವಮನುಷ್ಯನು, ''ನಾನು ನಿನ್ನ ಜೊತೆಯಲ್ಲಿ ಮನೆಗೆ ಬರಲು ಸಾಧ್ಯವಿಲ್ಲ. ನಾನು ಈ ಸ್ಥಳದಲ್ಲಿ ನಿನ್ನೊಂದಿಗೆ ತಿನ್ನುವುದಿಲ್ಲ ಮತ್ತು ಕುಡಿಯುವುದಿಲ್ಲ.
17ಯೆಹೋವನು ನನಗೆ, 'ನೀನು ಆ ಸ್ಥಳದಲ್ಲಿ ಅನ್ನಪಾನಗಳನ್ನು ತೆಗೆದುಕೊಳ್ಳಕೂಡದು; ನೀನು ಅಲ್ಲಿಗೆ ಹೋದ ರಸ್ತೆಯಲ್ಲಿ ಮತ್ತೆ ಹಿಂದಿರುಗಬಾರದು' ಎಂದು ಹೇಳಿದ್ದಾನೆ'' ಎಂಬುದಾಗಿ ಉತ್ತರಿಸಿದನು.

18ಆಗ ಆ ಪ್ರವಾದಿಯು, ''ಆದರೆ ನಾನೂ ನಿನ್ನಂತೆಯೇ ಒಬ್ಬ ಪ್ರವಾದಿ'' ಎಂದು ಹೇಳಿದನು. ನಂತರ ಹಳೆಯ ಪ್ರವಾದಿಯು ಅವನಿಗೆ 'ಯೆಹೋವನಿಂದ ಒಬ್ಬ ದೇವದೂತನು ನನ್ನ ಬಳಿಗೆ ಬಂದಿದ್ದನು. ಆ ದೂತನು ನಿನ್ನನ್ನು ನನ್ನ ಮನೆಗೆ ಕರೆತರಲು ನಿನ್ನೊಂದಿಗೆ ಅನ್ನಪಾನಗಳನ್ನು ತೆಗೆದುಕೊಳ್ಳಲು ನನಗೆ ತಿಳಿಸಿದನು'' ಎಂದು ಸುಳ್ಳು ಹೇಳಿದನು.

19ಆದುದರಿಂದ ಆ ಪ್ರವಾದಿಯ ಮನೆಗೆ ದೇವ ಮನುಷ್ಯನು ಹೋಗಿ, ಅವನ ಸಂಗಡ ಅನ್ನಪಾನಗಳನ್ನು ತೆಗೆದುಕೊಂಡನು.

20ಅವರು ಮೇಜಿನ ಮುಂದೆ ಕುಳಿತಿದ್ದಾಗ, ಯೆಹೋವನು ಆ ಪ್ರವಾದಿಯೊಂದಿಗೆ ಮಾತನಾಡಿದನು.
21ಆ ಪ್ರವಾದಿಯು ಯೆಹೂದ ದೇಶದವನಾದ ದೇವ ಮನುಷ್ಯನಿಗೆ, ''ಯೆಹೋವನು ಹೇಳುವುದೇನೆಂದರೆ, ನೀನು ಆತನಿಗೆ ವಿಧೇಯನಾಗಲಿಲ್ಲ. ಆತನ ಆಜ್ಞೆಯನ್ನು ನೀನು ಅನುಸರಿಸಲಿಲ್ಲ.
22ಈ ಸ್ಥಳದಲ್ಲಿ ನೀನು ಅನ್ನಪಾನಗಳನ್ನು ತೆಗೆದುಕೊಳ್ಳಕೂಡದೆಂದು ಯೆಹೋವನು ನಿನಗೆ ಆಜ್ಞಾಪಿಸಿದ್ದನು. ಆದರೆ ನೀನು ಹಿಂದಿರುಗಿಬಂದು ಅನ್ನಪಾನಗಳನ್ನು ತೆಗೆದುಕೊಂಡೆ. ಆದುದರಿಂದ ನಿನ್ನ ವಂಶದ ಸ್ಮಶಾನದಲ್ಲಿ ನಿನ್ನ ದೇಹವನ್ನು ಸಮಾಧಿ ಮಾಡಲಾಗುವುದಿಲ್ಲ ಎಂದು ಯೆಹೋವನು ಹೇಳುತ್ತಾನೆ'' ಎಂದನು.
23ದೇವಮನುಷ್ಯನು ಅನ್ನಪಾನಗಳನ್ನು ತೆಗೆದುಕೊಂಡ ನಂತರ ಆ ಪ್ರವಾದಿಯು ಅವನಿಗಾಗಿ ಕತ್ತೆಯ ಮೇಲೆ ತಡಿಯನ್ನು ಹಾಕಿದನು. ದೇವಮನುಷ್ಯನು ಅಲ್ಲಿಂದ ಹೊರಟನು.
24ಅವನು ತನ್ನ ಮನೆಗೆ ಹಿಂತಿರುಗಿ ಹೋಗುತ್ತಿರುವಾಗ ದಾರಿಯಲ್ಲಿ ಒಂದು ಸಿಂಹವು ಅವನ ಮೇಲೆರಗಿ ಅವನನ್ನು ಕೊಂದುಹಾಕಿತು. ಪ್ರವಾದಿಯ ದೇಹವು ರಸ್ತೆಯ ಮೇಲೆ ಬಿದ್ದಿತ್ತು. ಕತ್ತೆ ಮತ್ತು ಸಿಂಹವು ಆ ದೇಹದ ಹತ್ತಿರ ನಿಂತಿದ್ದವು.
25ಆ ರಸ್ತೆಯಲ್ಲಿ ಸಂಚರಿಸುತ್ತಿದ್ದ ಕೆಲವರು ಆ ದೇಹವನ್ನೂ ಮತ್ತು ಆ ದೇಹದ ಬಳಿ ನಿಂತಿದ್ದ ಸಿಂಹವನ್ನೂ ನೋಡಿದರು. ಆ ಜನರು ಪ್ರವಾದಿಯು ವಾಸಿಸುತ್ತಿದ್ದ ನಗರಕ್ಕೆ ಬಂದು,ಅವರು ರಸ್ತೆಯ ಮೇಲೆ ಕಂಡದ್ದನ್ನು ಹೇಳಿದರು.

26ಆ ಪ್ರವಾದಿಯು ಆ ಮನುಷ್ಯನನ್ನು ಮೋಸದಿಂದ ಕರೆದು ತಂದಿದ್ದನು. ಅವನಿಗೆ ಸಂಭವಿಸಿದ್ದನ್ನು ಕೇಳಿದಾಗ ಅವನು, ''ಯೆಹೋವನ ಆಜ್ಞೆಗಳನ್ನು ಅನುಸರಿಸದಿದ್ದ ದೇವಮನುಷ್ಯನೇ ಅವನಾಗಿರಬೇಕು. ಅವನನ್ನು ಕೊಲ್ಲಲು ಯೆಹೋವನು ಸಿಂಹವನ್ನು ಕಳುಹಿಸಿದನು. ಹೀಗೆ ಮಾಡುವುದಾಗಿ ಯೆಹೋವನೇ ಹೇಳಿದ್ದನು'' ಎಂದನು.
27ನಂತರ ಆ ಪ್ರವಾದಿಯು ತನ್ನ ಮಕ್ಕಳಿಗೆ, ''ನನ್ನ ಕತ್ತೆಯ ಮೇಲೆ ತಡಿಯೊಂದನ್ನು ಹಾಕಿ'' ಎಂದು ಹೇಳಿದನು. ಆಗ ಅವನ ಮಕ್ಕಳು ಕತ್ತೆಯ ಮೇಲೆ ತಡಿಯನ್ನು ಹಾಕಿದರು.
28ಪ್ರವಾದಿಯು ಹೋಗಿ , ರಸ್ತೆಯ ಮೇಲೆ ಬಿದ್ದಿರುವ ದೇಹವನ್ನು ಕಂಡನು. ಕತ್ತೆ ಮತ್ತು ಸಿಂಹವು ಆ ದೇಹದ ಹತ್ತಿರ ಇನ್ನೂ ನಿಂತಿದ್ದವು. ಸಿಂಹವು ಆ ದೇಹವನ್ನು ತಿಂದಿರಲಿಲ್ಲ ಮತ್ತು ಕತ್ತೆಗೆ ತೊಂದರೆಯನ್ನೂ ಮಾಡಿರಲಿಲ್ಲ.

29ಪ್ರವಾದಿಯು ಆ ದೇಹವನ್ನು ಕತ್ತೆಯ ಮೇಲೆ ಹಾಕಿದನು. ಸತ್ತವನಿಗಾಗಿ ರೋದಿಸಲು ಮತ್ತು ಅದನ್ನು ಸಮಾಧಿಮಾಡಲು ಆ ದೇಹವನ್ನು ನಗರಕ್ಕೆ ತಂದನು.
30ಪ್ರವಾದಿಯು ತನ್ನ ಕುಟುಂಬದ ಸ್ಮಶಾನದಲ್ಲಿ ಆ ಮನುಷ್ಯನ ದೇಹವನ್ನು ಸಮಾಧಿಮಾಡಿದನು. ಪ್ರವಾದಿಯು ಅವನಿಗಾಗಿ ಗೋಳಾಡುತ್ತಾ, ''ಅಯ್ಯೋ, ನನ್ನ ಸೋದರನೇ!'' ಎಂದು ಹೇಳಿದನು.

31ಹೀಗೆ ಪ್ರವಾದಿಯು ಆ ದೇಹವನ್ನು ಸಮಾಧಿ ಮಾಡಿದನು. ನಂತರ ಅವನು ತನ್ನ ಮಕ್ಕಳಿಗೆ, ''ನಾನು ಸತ್ತಾಗ, ನನ್ನನ್ನು ಅದೇ ಸ್ಮಶಾನದಲ್ಲಿ ಸಮಾಧಿಮಾಡಿ. ಅವನ ಪಕ್ಕದಲ್ಲೇ ನನ್ನ ಮೂಳೆಗಳನ್ನೂ ಹಾಕಿರಿ.
32ಅವನ ಮೂಲಕ ಯೆಹೋವನು ಹೇಳಿದ ಸಂಗತಿಗಳು ಖಂಡಿತವಾಗಿಯೂ ನಿಜವಾಗುತ್ತವೆ. ಬೇತೇಲಿನ ಯಜ್ಞವೇದಿಕೆಯ ವಿರುದ್ಧವಾಗಿಯೂ ಸಮಾರ್ಯದ ಇತರ ಪಟ್ಟಣಗಳಲ್ಲಿರುವ ಉನ್ನತ ಸ್ಥಳಗಳ ವಿರುದ್ಧವಾಗಿಯೂ

ಯೆಹೋವನು ಅವನ ಮೂಲಕವಾಗಿ ಮಾತನಾಡಿದನು''
ಎಂದು ಹೇಳಿದನು.
33ರಾಜನಾದ ಯಾರೊಬ್ಬಾಮನು ಬದಲಾವಣೆಯಾಗ
ಲಿಲ್ಲ. ಅವನು ಕೆಟ್ಟಕಾರ್ಯಗಳನ್ನು ಮಾಡುತ್ತಲೇ
ಇದ್ದನು. ಅವನು ಬೇರೆ ಬೇರೆ ಕುಲಗಳಿಂದ ಯಾಜಕ
ರನ್ನು ಆರಿಸಿಕೊಳ್ಳುತ್ತಲೇ ಇದ್ದನು. ಆ ಯಾಜಕರು ಎತ್ತ
ರದ ಸ್ಥಳಗಳಲ್ಲಿ ಸೇವೆಯನ್ನು ಮಾಡುತ್ತಿದ್ದರು. ಯಾಜಕ
ನಾಗಬೇಕೆಂದು ಯಾವ ವ್ಯಕ್ತಿಯಾದರೂ ಇಚ್ಛೆಸಿದರೆ,
ಯಾಜಕನಾಗಲು ಅವನಿಗೆ ಅವಕಾಶ ಕಲ್ಪಿಸುತ್ತಿದ್ದನು.
34ಅವನ ರಾಜ್ಯವು ವಿನಾಶಗೊಳ್ಳಲು ಮತ್ತು ಹಾಳಾಗಲು
ಆ ಪಾಪವೇ ಕಾರಣವಾಯಿತು.

## ಯಾರೊಬ್ಬಾಮನ ಮಗನ ಮರಣ

14 ಆ ಸಮಯದಲ್ಲಿ, ಯಾರೊಬ್ಬಾಮನ ಮಗನಾದ
ಅಬೀಯನು ಅಸ್ವಸ್ಥನಾದನು. 2ಯಾರೊಬ್ಬಾ
ಮನು ತನ್ನ ಪತ್ನಿಗೆ, ''ಶೀಲೋವಿಗೆ ಹೋಗು. ಅಲ್ಲಿಗೆ
ಹೋಗಿ ಪ್ರವಾದಿಯಾದ ಅಹೀಯನನ್ನು ನೋಡು.
ನಾನು ಇಸ್ರೇಲಿನ ರಾಜನಾಗುವೆನೆಂದು ತಿಳಿಸಿದ ಮನು
ಷ್ಯನೇ ಅಹೀಯನು . ನೀನು ನನ್ನ ಪತ್ನಿಯೆಂದು ಜನರಿಗೆ
ತಿಳಿಯದ ರೀತಿಯಲ್ಲಿ ವಸ್ತ್ರಗಳನ್ನು ಧರಿಸಿಕೊ.
3ಪ್ರವಾದಿಗೆ ಹತ್ತು ರೊಟ್ಟಿಗಳನ್ನು, ಕೆಲವು ಸಿಹಿ ಪದಾರ್ಥ
ಗಳನ್ನು ಮತ್ತು ಜೇನುತುಪ್ಪ ಜಾಡಿಯನ್ನು ಕೊಡು. ನಂತರ
ನಮ್ಮ ಮಗನಿಗೆ ಏನಾಗುತ್ತದೆಂಬುದನ್ನು ಕೇಳು. ಪ್ರವಾದಿ
ಯಾದ ಅಹೀಯನು ನಿನಗೆ ತಿಳಿಸುತ್ತಾನೆ'' ಎಂದು
ಹೇಳಿದನು. 4ರಾಜನ ಪತ್ನಿಯು ಅವನು ಹೇಳಿದಂತೆ
ಮಾಡಿದಳು. ಅವಳು ಶೀಲೋವಿಗೆ ಹೋದಳು. ಅವಳು
ಪ್ರವಾದಿಯಾದ ಅಹೀಯನ ಮನೆಗೆ ಹೋದಳು.
ಅಹೀಯನಿಗೆ ಬಹಳ ವಯಸ್ಸಾಗಿತ್ತು; ಅವನು ಕುರುಡ
ನಾಗಿದ್ದನು. 5ಆದರೆ ಯೆಹೋವನು ಅವನಿಗೆ, ''ಯಾರೊ
ಬ್ಬಾಮನ ಪತ್ನಿಯು ಅಸ್ವಸ್ಥನಾಗಿರುವ ತನ್ನ ಮಗನ ಬಗ್ಗೆ
ಕೇಳಲು ನಿನ್ನ ಬಳಿಗೆ ಬರುತ್ತಿದ್ದಾಳೆ'' ಎಂದು ಹೇಳಿದ್ದನು.
ಅಹೀಯನು ಏನು ಹೇಳಬೇಕೆಂಬುದನ್ನು ಯೆಹೋವನು
ಅವನಿಗೆ ತಿಳಿಸಿದ್ದನು.

ಯಾರೊಬ್ಬಾಮನ ಪತ್ನಿಯು ಅಹೀಯನ ಮನೆಗೆ
ಬಂದಳು. ತಾನಾರೆಂಬುದು ಜನರಿಗೆ ತಿಳಿಯಬಾರ
ದೆಂದು ಅವಳು ಪ್ರಯತ್ನಿಸುತ್ತಿದ್ದಳು. 6ಅವಳು ಬಾಗಿಲಿನ
ಬಳಿಗೆ ಬಂದಾಗಲೇ ಅಹೀಯನಿಗೆ ಅಕೆಯ ಪಾದಗಳ
ಸಪ್ಪಳವು ಕೇಳಿಸಿತು. ಆಗ ಅಹೀಯನು, ''ಯಾರೊಬ್ಬಾ
ಮನ ಪತ್ನಿಯೇ, ಒಳಗೆ ಬಾ. ನೀನು ಯಾರೆಂಬುದು
ಜನರಿಗೆ ತಿಳಿಯದಂತೆ ಮಾಡಲು ಯಾಕೆ ಪ್ರಯತ್ನಿಸು
ತ್ತಿರುವೆ? ನಾನು ನಿನಗೆ ಅಶುಭದ ಸುದ್ದಿಯನ್ನು ತಿಳಿ
ಸುತ್ತೇನೆ. 7ಇಸ್ರೇಲಿನ ದೇವರಾದ ಯೆಹೋವನು
ಹೀಗೆ ಹೇಳುತ್ತಾನೆಂದು ನೀನು ಹಿಂದಿರುಗಿ ಹೋಗಿ
ಯಾರೊಬ್ಬಾಮನಿಗೆ ತಿಳಿಸು. ಯೆಹೋವನು ಇಂತೆನ್ನು
ತ್ತಾನೆ: ''ಯಾರೊಬ್ಬಾಮನೇ, ಇಸ್ರೇಲಿನ ಜನರಲ್ಲೆಲ್ಲಾ
ನಾನು ನಿನ್ನನ್ನು ಆರಿಸಿಕೊಂಡೆ. ನನ್ನ ಜನರನ್ನು ಆಳಲು
ನಾನು ನಿನ್ನನ್ನು ನೇಮಿಸಿದೆ. 8ದಾವೀದನ ಕುಲವು
ಇಸ್ರೇಲ್ ರಾಜ್ಯವನ್ನು ಆಳುತ್ತಿತ್ತು. ಆದರೆ ನಾನು ಅವ
ರಿಂದ ರಾಜ್ಯವನ್ನು ತೆಗೆದುಕೊಂಡು, ನಿನಗೆ ಅದನ್ನು
ಕೊಟ್ಟೆ. ಆದರೆ ನೀನು ನನ್ನ ಸೇವಕನಾದ ದಾವೀದ
ನಂತಲ್ಲ. ಅವನು ನನ್ನ ಆಜ್ಞೆಗಳಿಗೆ ಯಾವಾಗಲೂ
ವಿಧೇಯನಾಗಿದ್ದನು. ಅವನು ಪೂರ್ಣ ಮನಸ್ಸಿನಿಂದ
ನನ್ನನ್ನು ಅನುಸರಿಸುತ್ತಿದ್ದನು. ನಾನು ಒಪ್ಪಿಕೊಳ್ಳುವ
ಸಂಗತಿಗಳನ್ನು ಮಾತ್ರ ಅವನು ಮಾಡಿದನು. 9ಆದರೆ
ನೀನು ಅನೇಕ ಪಾಪ ಗಳನ್ನು ಮಾಡಿರುವೆ. ನಿನಗಿಂತಲೂ
ಮೊದಲು ಆಳಿದವರ ಪಾಪಗಳಿಗಿಂತ ನಿನ್ನ ಪಾಪಗಳು
ಹೆಚ್ಚು ಭಯಂಕರವಾಗಿವೆ. ನೀನು ನನ್ನನ್ನು ಅನುಸರಿಸು
ವುದನ್ನು ಬಿಟ್ಟು ಬಿಟ್ಟೆ. ನೀನು ವಿಗ್ರಹಗಳನ್ನು ಮತ್ತು
ಅನ್ಯದೇವರುಗಳನ್ನು ನಿರ್ಮಿಸಿದೆ. ಇದು ನನ್ನಲ್ಲಿ ಹೆಚ್ಚು
ಕೋಪವುಂಟುಮಾಡಿತು. 10ಆದುದರಿಂದ ಯಾರೊಬ್ಬಾ
ಮನೇ, ನಾನು ನಿನ್ನ ಕುಟುಂಬಕ್ಕೆ ಕೇಡುಗಳನ್ನು ಬರ
ಮಾಡುತ್ತೇನೆ. ನಿನ್ನ ಕುಟುಂಬದ ಗಂಡಸರೆಲ್ಲರನ್ನು
ನಾನು ಕೊಲ್ಲುತ್ತೇನೆ. ಬೆಂಕಿಯು ಸಗಣಿಯನ್ನು ಸುಟ್ಟು
ಹಾಕುವಂತೆ ನಾನು ನಿನ್ನ ಕುಟುಂಬವನ್ನು ಸಂಪೂರ್ಣ
ವಾಗಿ ನಾಶಪಡಿಸುತ್ತೇನೆ. 11ನಿನ್ನ ಕುಟುಂಬದಲ್ಲಿ ಯಾವ
ನಾದರೂ ನಗರದಲ್ಲಿ ಸತ್ತರೆ, ಅವನನ್ನು ನಾಯಿಗಳು
ಕಿತ್ತುತಿನ್ನುತ್ತವೆ. ನಿನ್ನ ಕುಟುಂಬದಲ್ಲಿ ಯಾವನಾದರೂ
ಹೊಲಗಳಲ್ಲಿ ಸತ್ತರೆ, ಅವನನ್ನು ಪಕ್ಷಿಗಳು ಕಿತ್ತುತಿನ್ನುತ್ತವೆ.
ಇದು ಯೆಹೋವನ ನುಡಿ'' ಎಂದು ಹೇಳಿದನು.
12ನಂತರ ಪ್ರವಾದಿಯಾದ ಅಹೀಯನು ಯಾರೊಬ್ಬಾ
ಮನ ಪತ್ನಿಯ ಸಂಗಡ ಮಾತನಾಡುವುದನ್ನು ಮುಂದು
ವರಿಸಿ, ''ಈಗ ಮನೆಗೆ ಹೋಗು. ನೀನು ನಿನ್ನ ನಗರವನ್ನು
ಪ್ರವೇಶಿಸಿದ ತಕ್ಷಣ, ನಿನ್ನ ಮಗನು ಸತ್ತುಹೋಗುತ್ತಾನೆ.
13ಇಸ್ರೇಲರೆಲ್ಲರು ಅವನಿಗಾಗಿ ಗೋಳಾಡಿ ಸಮಾಧಿ
ಮಾಡುತ್ತಾರೆ. ಯಾರೊಬ್ಬಾಮನ ಕುಟುಂಬದಲ್ಲಿ ನಿನ್ನ
ಮಗನನೊಬ್ಬನನ್ನು ಮಾತ್ರ ಸಮಾಧಿಮಾಡುತ್ತಾರೆ.
ಏಕೆಂದರೆ ಯಾರೊಬ್ಬಾಮನ ಕುಟುಂಬದಲ್ಲಿ ಇವ
ನೊಬ್ಬನು ಮಾತ್ರ ಇಸ್ರೇಲಿನ ದೇವರಾದ ಯೆಹೋವನ
ದೃಷ್ಟಿಯಲ್ಲಿ ಒಳ್ಳೆಯವನಾಗಿದ್ದನು. 14ಯೆಹೋವನು
ಇಸ್ರೇಲಿಗೆ ಹೊಸ ರಾಜನನ್ನು ನೇಮಿಸುತ್ತಾನೆ. ಆ ಹೊಸ
ರಾಜನು ಯಾರೊಬ್ಬಾಮನ ಕುಟುಂಬವನ್ನು ನಾಶ
ಗೊಳಿಸುತ್ತಾನೆ. ಇದು ಬಹುಬೇಗನೆ ಸಂಭವಿಸುತ್ತದೆ.
15ನಂತರ ಯೆಹೋವನು ಇಸ್ರೇಲರನ್ನು ಹೊಡೆಯು
ತ್ತಾನೆ. ಇಸ್ರೇಲಿನ ಜನರು ಬಹಳ ಭಯಗೊಳ್ಳುವರು.

ಅವರು ನೀರಿನಲ್ಲಿ ಎತ್ತರವಾಗಿ ಬೆಳೆದಿರುವ ಹುಲ್ಲಿನಂತೆ
ನಡುಗುವರು. ಯೆಹೋವನು ಇಸ್ರೇಲರನ್ನು ಈ ಶ್ರೇಷ್ಠ
ವಾದ ದೇಶದಿಂದ ಚದರಿಸಿಬಿಡುವನು; ಆತನು ಈ
ದೇಶವನ್ನು ಅವರ ಪೂರ್ವಿಕರಿಗೆ ಕೊಟ್ಟಿದ್ದನು. ಆತನು
ಇಸ್ರೇಲರನ್ನು ಯೂಫ್ರೇಟಿಸ್ ನದಿಯ ಮತ್ತೊಂದು
ಕಡೆಗೆ ಚದರಿಸಿಬಿಡುತ್ತಾನೆ. ಯೆಹೋವನು ಅವರ ಮೇಲೆ
ಕೋಪಗೊಂಡಿರುವುದೇ ಅದಕ್ಕೆ ಕಾರಣ. ಅವರು
ಅಶೇರ್ ವಿಗ್ರಹವನ್ನು ಆರಾಧಿಸಲು ವಿಶೇಷ ಸ್ತಂಭ
ಗಳನ್ನು ಮಾಡಿಕೊಂಡಿದ್ದರಿಂದ ಆತನು ಅವರ ಮೇಲೆ
ಕೋಪಗೊಂಡನು. 16ಯಾರೊಬ್ಬಾಮನು ಪಾಪವನ್ನು
ಮಾಡಿದನು. ನಂತರ ಇಸ್ರೇಲಿನ ಜನರೂ ಪಾಪ ಮಾಡು
ವಂತೆ ಯಾರೊಬ್ಬಾಮನು ಪ್ರೇರೇಪಿಸಿದನು. ಆದುದ
ರಿಂದ ಇಸ್ರೇಲಿನ ಜನರು ಸೋಲಿಸಲ್ಪಡುವಂತೆ
ಯೆಹೋವನು ಅವಕಾಶ ಮಾಡುತ್ತಾನೆ'' ಎಂದು
ಹೇಳಿದನು.

17ಯಾರೊಬ್ಬಾಮನ ಪತ್ನಿಯು ತಿರ್ಚಾಗೆ ಹಿಂದಿರುಗಿ
ಹೋದಳು. ಆಕೆಯು ಮನೆಯೊಳಕ್ಕೆ ಕಾಲಿಟ್ಟಕೂಡಲೇ
ಮಗು ಸತ್ತುಹೋಯಿತು. 18ಇಸ್ರೇಲರೆಲ್ಲರು ಅವನಿಗಾಗಿ
ಅತ್ತು, ಸಮಾಧಿಮಾಡಿದರು. ಯೆಹೋವನು ಹೇಳಿ
ದಂತೆಯೇ ಇದು ಸಂಭವಿಸಿತು. ಯೆಹೋವನು ತನ್ನ ಸೇವ
ಕನೂ ಪ್ರವಾದಿಯೂ ಆದ ಅಹೀಯನ ಮೂಲಕ ಈ
ಸಂಗತಿಗಳನ್ನು ಹೇಳಿಸಿದ್ದನು.

19ರಾಜನಾದ ಯಾರೊಬ್ಬಾಮನು ಇತರ ಅನೇಕ
ಕಾರ್ಯಗಳನ್ನು ಮಾಡಿದನು. ಅವನು ಯುದ್ಧಗಳಲ್ಲಿ
ಹೋರಾಡಿದನು ಮತ್ತು ಜನರನ್ನು ಆಳಿದನು.
''ಇಸ್ರೇಲಿನ ರಾಜರುಗಳ ಇತಿಹಾಸ'' ಎಂಬ ಪುಸ್ತಕದಲ್ಲಿ
ಅವನು ಮಾಡಿದ ಕಾರ್ಯಗಳೆಲ್ಲವನ್ನು ಬರೆಯಲಾಗಿದೆ.
20ಯಾರೊಬ್ಬಾಮನು ರಾಜನಾಗಿ ಇಪ್ಪತ್ತೆರಡು ವರ್ಷ
ಆಳಿದನು. ನಂತರ ಅವನು ಸತ್ತುಹೋದನು. ಅವನನ್ನು
ಪೂರ್ವಿಕರ ಬಳಿ ಸಮಾಧಿಮಾಡಿದರು. ಅವನ ಮಗನಾದ
ನಾದಾಬನು ಅವನ ನಂತರ ಹೊಸ ರಾಜನಾದನು.

21ಆ ಕಾಲದಲ್ಲಿ ಸೊಲೊಮೋನನ ಮಗನಾದ ರೆಹಬ್ಬಾ
ಮನು ಯೆಹೂದದ ರಾಜನಾಗಿದ್ದನು. ಅವನು ರಾಜ
ನಾದಾಗ ಅವನಿಗೆ ನಲವತ್ತೊಂದು ವರ್ಷ ವಯಸ್ಸಾಗಿತ್ತು.
ರೆಹಬ್ಬಾಮನು ಜೆರುಸಲೇಮ್ ನಗರದಲ್ಲಿ ಹದಿನೇಳು
ವರ್ಷ ಆಳಿದನು. ಈ ನಗರದಲ್ಲಿ ತಾನು ಸನ್ಮಾನಿಸಲ್ಪಡ
ಬೇಕೆಂದು ಯೆಹೋವನು ಈ ನಗರವನ್ನು ಆರಿಸಿ
ಕೊಂಡಿದ್ದನು. ಇಸ್ರೇಲಿನ ಎಲ್ಲಾ ನಗರಗಳಲ್ಲಿ ಈ ನಗರ
ವನ್ನು ಆತನು ಆರಿಸಿಕೊಂಡಿದ್ದನು. ಅಮ್ಮೋನಿಯಳಾದ
ನಯಮಾ ಎಂಬವಳು ರೆಹಬ್ಬಾಮನ ತಾಯಿ.

22ಯೆಹೋವನು ತಪ್ಪೆಂದು ಹೇಳಿದ ಕಾರ್ಯಗಳನ್ನೆಲ್ಲ
ಯೆಹೂದದ ಜನರು ಮಾಡಿ ಪಾಪಿಗಳಾದರು.
ಯೆಹೋವನು ಅವರ ಮೇಲೆ ಹೆಚ್ಚು ಕೋಪಗೊಳ್ಳುವಂತೆ
ಆತನಿಗೆ ವಿರುದ್ಧವಾದ ಅನೇಕ ಕಾರ್ಯಗಳನ್ನು
ಮಾಡಿದರು. ಅವರಿಗಿಂತಲೂ ಮುಂಚೆ ಜೀವಿಸಿದ್ದ ಅವರ
ಪೂರ್ವಿಕರಿಗಿಂತಲೂ ಈ ಜನರು ಹೆಚ್ಚು ಕೀಳಾಗಿದ್ದರು.
23ಈ ಜನರು ಎತ್ತರವಾದ ಸ್ಥಳಗಳಲ್ಲಿ ಕಲ್ಲಿನ
ಸ್ಮಾರಕಗಳನ್ನು, ಪವಿತ್ರ ಸ್ತಂಭಗಳನ್ನು ನಿರ್ಮಿಸಿದರು.
ಅವರು ಅವುಗಳನ್ನು ಎತ್ತರವಾದ ಪ್ರತಿಯೊಂದು ಬೆಟ್ಟದ
ಮೇಲೂ ಪ್ರತಿಯೊಂದು ಹಸಿರುಮರದ ಕೆಳಗಡೆಯೂ
ನಿರ್ಮಿಸಿದರು. 24ಇತರ ದೇವರುಗಳ ಸೇವೆಗಾಗಿ ತಮ್ಮ
ದೇಹಗಳನ್ನು ಲೈಂಗಿಕ ಸಂಬಂಧಕ್ಕೆ ಮಾರಾಟ ಮಾಡುವ
ಗಂಡಸರೂ ಅಲ್ಲಿದ್ದರು. ಯೆಹೂದದ ಜನರು ಅನೇಕ
ಕೆಟ್ಟಕಾರ್ಯಗಳನ್ನು ಮಾಡಿದರು. ಆ ದೇಶದಲ್ಲಿ
ಇವರಿಗಿಂತ ಮುಂಚೆ ನೆಲಸಿದ್ದ ಜನರು ಇಂತಹ
ದುಷ್ಟಕಾರ್ಯಗಳನ್ನು ಮಾಡುತ್ತಿದ್ದರು. ದೇವರು ಆ
ಜನರಿಂದ ಈ ದೇಶವನ್ನು ತೆಗೆದುಕೊಂಡು ಇಸ್ರೇಲರಿಗೆ
ಕೊಟ್ಟಿದ್ದನು.

25ರೆಹಬ್ಬಾಮನು ರಾಜನಾಗಿದ್ದ ಐದನೆಯ ವರ್ಷದಲ್ಲಿ
ಈಜಿಪ್ಟಿನ ರಾಜನಾದ ಶೀಶಕನು ಜೆರುಸಲೇಮಿನ ವಿರುದ್ಧ
ಹೋರಾಡಿದನು.

26 ಶೀಶಕನು ಯೆಹೋವನ ಆಲಯದ ಭಂಡಾರವನ್ನು
ಮತ್ತು ರಾಜನ ಅರಮನೆಯ ಭಂಡಾರವನ್ನು ತೆಗೆದು
ಕೊಂಡು ಹೋದನು. ಅರಾಮದ ರಾಜನಾದ ಹದದೆಜ
ರನ ಅಧಿಕಾರಿಗಳಿಂದ ದಾವೀದನು ತೆಗೆದುಕೊಂಡಿದ್ದ
ಬಂಗಾರದ ಗುರಾಣಿಗಳನ್ನೂ ಅವನು ತೆಗೆದುಕೊಂಡು
ಹೋದನು. ದಾವೀದನು ಈ ಗುರಾಣಿಗಳನ್ನು ಜೆರುಸ
ಲೇಮಿಗೆ ತಂದಿದ್ದನು. ಆದರೆ ಶೀಶಕನು ಎಲ್ಲಾ ಬಂಗಾ
ರದ ಗುರಾಣಿಗಳನ್ನು ತೆಗೆದುಕೊಂಡು ಹೋದನು.
27ಆದುದರಿಂದ ರಾಜನಾದ ರೆಹಬ್ಬಾಮನು ಅವುಗಳ
ಸ್ಥಾನದಲ್ಲಿಡಲು ಅನೇಕ ಗುರಾಣಿಗಳನ್ನು ಮಾಡಿಸಿದನು.
ಆದರೆ ಈ ಗುರಾಣಿಗಳನ್ನು ಮಾಡಿಸಿದ್ದು ಹಿತ್ತಾಳೆಯಲ್ಲೇ
ಹೊರತು ಬಂಗಾರದಿಂದಲ್ಲ. ಅರಮನೆಯ ಬಾಗಿಲಿನ
ಕಾವಲುಗಾರರಿಗೆ ಈ ಗುರಾಣಿಗಳನ್ನು ಅವನು ಕೊಟ್ಟನು.
28ರಾಜನು ಯೆಹೋವನ ಆಲಯಕ್ಕೆ ಹೋಗುವಾಗ ಪ್ರತಿ
ಸಲವೂ ಮೈಗಾವಲಿನವರು ಅವನ ಜೊತೆಯಲ್ಲಿ ಹೋಗು
ತ್ತಿದ್ದರು. ಅವರು ಗುರಾಣಿಗಳನ್ನು ತೆಗೆದುಕೊಂಡು
ಹೋಗುತ್ತಿದ್ದರು. ನಂತರ ಅವರು ರಕ್ಷಣಾ ಕೊಠಡಿಯ
ಗೋಡೆಯ ಮೇಲೆ ಈ ಗುರಾಣಿಗಳನ್ನು ಇಡುತ್ತಿದ್ದರು.

29ರಾಜನಾದ ರೆಹಬ್ಬಾಮನು ಮಾಡಿದ ಎಲ್ಲಾ ಕಾರ್ಯ
ಗಳನ್ನು ''ಯೆಹೂದದ ರಾಜರುಗಳ ಚರಿತ್ರೆ'' ಎಂಬ
ಪುಸ್ತಕದಲ್ಲಿ ಬರೆಯಲ್ಪಟ್ಟಿದೆ. 30ರೆಹಬ್ಬಾಮನ ಮತ್ತು
ಯಾರೊಬ್ಬಾಮನ ನಡುವೆ ಯಾವಾಗಲೂ ಯುದ್ಧ
ನಡೆಯುತ್ತಿತ್ತು.

31ರೆಹಬ್ಬಾಮನು ಸತ್ತುಹೋದನು. ಅವನನ್ನು ಅವನ
ಪೂರ್ವಿಕನಾದ ದಾವೀದನಗರದಲ್ಲಿ ಸಮಾಧಿ ಮಾಡಿ
ದರು. (ಅಮ್ಮೋನಿಯಾದ ನಯಮಾಳು ಅವನ ತಾಯಿ)
ಅವನ ನಂತರ ಅವನ ಮಗ ಅಬೀಯಾಮನು ರಾಜ
ನಾದನು.

### ಯೆಹೂದದ ರಾಜನಾದ ಅಬೀಯಾಮ

15 ನೆಬಾಟನ ಮಗನಾದ ಯಾರೊಬ್ಬಾಮನು
ಇಸ್ರೇಲನ್ನು ಆಳುತ್ತಿದ್ದನು. ಯಾರೊಬ್ಬಾಮನು
ರಾಜನಾಗಿದ್ದ ಹದಿನೆಂಟನೆಯ ವರ್ಷದಲ್ಲಿ, ಅಬೀಯಾ
ಮನು ಯೆಹೂದದ ಹೊಸ ರಾಜನಾದನು. 2ಅಬೀಯಾ
ಮನು ಮೂರು ವರ್ಷ ಜೆರುಸಲೇಮಿನಲ್ಲಿ ಆಳಿದನು.
ಅವನ ತಾಯಿಯ ಹೆಸರು ಮಾಕಾ. ಅವಳು ಅಬೀಷಾ
ಲೋಮನ ಮಗಳು.

3ಅವನಿಗಿಂತಲೂ ಮುಂಚೆ ಅವನ ತಂದೆಯು ಮಾಡಿದ
ಪಾಪಗಳನ್ನೇ ಅವನೂ ಮಾಡಿದನು. ಅವನ ತಾತನಾದ
ದಾವೀದನು ತನ್ನ ದೇವರಾದ ಯೆಹೋವನಿಗೆ ನಂಬಿ
ಗಸ್ತನಾಗಿದ್ದಂತೆ ಅಬೀಯಾಮನು ನಂಬಿಗಸ್ತನಾಗಿರಲಿಲ್ಲ.
4ಯೆಹೋವನು ದಾವೀದನನ್ನು ಪ್ರೀತಿಸಿದ್ದರಿಂದ
ಅವನಿಗೋಸ್ಕರ ಅಬೀಯಾಮನಿಗೆ ಜೆರುಸಲೇಮಿನಲ್ಲಿ
ರಾಜ್ಯವನ್ನು ದಯಪಾಲಿಸಿದನು; ಅವನಿಗೆ ಮಗನನ್ನು
ಅನುಗ್ರಹಿಸಿದನು; ಜೆರುಸಲೇಮ್ ಸುರಕ್ಷಿತವಾಗಿರು
ವಂತೆ ಮಾಡಿದನು. 5ಯೆಹೋವನು ಇಚ್ಛಿಸಿದ ಕಾರ್ಯ
ಗಳನ್ನು ದಾವೀದನು ಯಾವಾಗಲೂ ಮಾಡುತ್ತಿದ್ದನು.
ಯೆಹೋವನ ಆಜ್ಞೆಗಳಿಗೆ ಅವನು ಯಾವಾಗಲೂ
ವಿಧೇಯತೆಯಿಂದಿದ್ದನು. ದಾವೀದನು ಹಿತ್ತಿಯನಾದ
ಊರೀಯನ ವಿಷಯದಲ್ಲಿ ಮಾತ್ರ ಯೆಹೋವನಿಗೆ
ಅವಿಧೇಯನಾದನು.

6ರೆಹಬ್ಬಾಮನ ಮತ್ತು ಯಾರೊಬ್ಬಾಮನ ನಡುವೆ
ಯುದ್ಧವು ನಡೆಯುತ್ತಲೇ ಇರುತ್ತಿತ್ತು. 7ಅಬೀಯಾಮನು
ಮಾಡಿದ ಇತರ ಎಲ್ಲಾ ಕಾರ್ಯಗಳ ಬಗ್ಗೆ ''ಯೆಹೂದದ
ರಾಜರುಗಳ ಚರಿತ್ರೆ''ಯಲ್ಲಿ ಬರೆದಿದೆ. ಅಬೀಯಾಮನು
ರಾಜನಾಗಿದ್ದ ಎಲ್ಲಾ ಕಾಲದಲ್ಲೂ, ಯಾರೊಬ್ಬಾಮನ
ಮತ್ತು ಅಬೀಯಾಮನ ನಡುವೆ ಯುದ್ಧ ನಡೆಯುತ್ತಲೇ
ಇತ್ತು. 8ಅಬೀಯಾಮನು ಸತ್ತಾಗ, ಅವನನ್ನು ದಾವೀದ
ನಗರದಲ್ಲಿ ಸಮಾಧಿಮಾಡಿದರು. ಅಬೀಯಾಮನ
ನಂತರ ಅವನ ಮಗನಾದ ಆಸನು ಹೊಸ ರಾಜನಾದನು.

### ಆಸ ಯೆಹೂದದ ರಾಜ

9ಯಾರೊಬ್ಬಾಮನು ಇಸ್ರೇಲಿನ ರಾಜನಾಗಿದ್ದ
ಇಪ್ಪತ್ತನೆಯ ವರ್ಷದಲ್ಲಿ ಆಸನು ಯೆಹೂದದ ರಾಜ
ನಾದನು. 10ಆಸನು ಜೆರುಸಲೇಮಿನಲ್ಲಿ ನಲವತ್ತೊಂದು
ವರ್ಷ ಆಳಿದನು. ಅವನ ಅಜ್ಜಿಯ ಹೆಸರು ಮಾಕಾ.
ಈಕೆಯು ಅಬೀಷಾಲೋಮನ ಮಗಳು.

11ಆಸನು ತನ್ನ ಪೂರ್ವಿಕನಾದ ದಾವೀದನು ಮಾಡಿ
ದಂತೆ, ಯೆಹೋವನು ಇಚ್ಛಿಸಿದ ಕಾರ್ಯಗಳನ್ನೇ ಮಾಡಿ
ದನು. 12ಆ ಕಾಲದಲ್ಲಿ, ಇತರ ದೇವರುಗಳ ಸೇವೆ
ಗೋಸ್ಕರ ತಮ್ಮ ದೇಹಗಳನ್ನು ಲೈಂಗಿಕವಾಗಿ ಮಾರಾಟ
ಮಾಡುತ್ತಿದ್ದ ಜನರು ಅಲ್ಲಿದ್ದರು. ಆ ಜನರು ದೇಶವನ್ನು
ಬಿಟ್ಟುಹೋಗುವಂತೆ ಅವನು ಬಲವಂತ ಮಾಡಿದನು.
ಆಸನು ತನ್ನ ಪೂರ್ವಿಕರು ನಿರ್ಮಿಸಿದ ವಿಗ್ರಹಗಳನ್ನು
ನಿರ್ಮೂಲಮಾಡಿದನು. 13ಆಸನು ತನ್ನ ಅಜ್ಜಿ ಮಾಕಳನ್ನು
ರಾಣಿಯ ಪಟ್ಟದಿಂದ ಕೆಳಗಿಳಿಸಿದನು. ಮಾಕಳು ಅಶೇರ
ದೇವತೆಯ ಒಂದು ಭೀಕರ ಮೂರ್ತಿಯನ್ನು ಮಾಡಿಸಿ
ದ್ದಳು. ಅವನು ಅದನ್ನು ಕಿದ್ರೋನ್ ಕಣಿವೆಯಲ್ಲಿ ಸುಟ್ಟು
ಹಾಕಿದನು. 14ಆಸನು ಎತ್ತರವಾದ ಸ್ಥಳಗಳನ್ನು ನಾಶ
ಪಡಿಸಲಿಲ್ಲ. ಆದರೆ ಅವನು ತನ್ನ ಜೀವಮಾನವೆಲ್ಲಾ
ಯೆಹೋವನಿಗೆ ನಂಬಿಗಸ್ಥನಾಗಿದ್ದನು.

15ಇದಲ್ಲದೆ ತಾನು ಮತ್ತು ತನ್ನ ತಂದೆಯು ಮೀಸಲಾ
ಗಿಟ್ಟಿದ್ದ ಬೆಳ್ಳಿ ಬಂಗಾರವನ್ನೂ ಪಾತ್ರೆಗಳನ್ನೂ
ದೇವಾಲಯದಲ್ಲಿಟ್ಟನು.

16ರಾಜನಾದ ಆಸನು ಯೆಹೂದದ ಅರಸನಾಗಿದ್ದ
ಕಾಲದಲ್ಲಿ ಅವನಿಗೆ ಮತ್ತು ಇಸ್ರೇಲಿನ ರಾಜನಾದ
ಬಾಷನಿಗೆ ಯಾವಾಗಲೂ ಯುದ್ಧವು ನಡೆಯುತ್ತಿತ್ತು.
17ಯೆಹೂದದ ವಿರುದ್ಧವಾಗಿ ಬಾಷನು ಹೋರಾಡಿದನು.
ಆಸನ ದೇಶವಾದ ಯೆಹೂದದಿಂದ ಜನರು ಬರುವು
ದನ್ನೂ ಹೋಗುವುದನ್ನೂ ನಿಲ್ಲಿಸಲು ಬಾಷನು ಇಚ್ಛಿಸಿ
ದನು. ಆದುದರಿಂದ ಅವನು ರಾಮ ನಗರವನ್ನು ಬಲ
ಪಡಿಸಿದನು. 18ಆದುದರಿಂದ ಆಸನು ಯೆಹೋವನ
ಆಲಯದ ಮತ್ತು ರಾಜನ ಅರಮನೆಯ ಭಂಡಾರದಲ್ಲಿ
ಉಳಿದಿದ್ದ ಎಲ್ಲಾ ಬೆಳ್ಳಿಬಂಗಾರಗಳನ್ನು ತೆಗೆದು
ಕೊಂಡನು. ಅವನು ತನ್ನ ಸೇವಕರಿಗೆ ಬೆಳ್ಳಿಬಂಗಾರ
ಗಳನ್ನು ಕೊಟ್ಟು, ಅವರನ್ನು ಅರಾಮ್ಯರ ರಾಜನಾದ
ಬೆನ್ಹದದನ ಬಳಿಗೆ ಕಳುಹಿಸಿದನು. (ಬೆನ್ಹದದನು
ಟಬ್ರಿಮ್ಮೋನನ ಮಗ. ಟಬ್ರಿಮ್ಮೋನನು ಹಜ್ಯೋನನ
ಮಗ.) ದಮಸ್ಕ ನಗರವು ಅವನ ರಾಜಧಾನಿಯಾಗಿತ್ತು.
19ಆಸನು ಈ ಸಂದೇಶವನ್ನು ಕಳುಹಿಸಿದನು: ''ನನ್ನ
ತಂದೆಯೂ ನಿನ್ನ ತಂದೆಯೂ ಶಾಂತಿ ಒಪ್ಪಂದವನ್ನು
ಮಾಡಿಕೊಂಡಿದ್ದರು. ಈಗ ನಾನು ನಿನ್ನೊಂದಿಗೆ ಶಾಂತಿ
ಒಪ್ಪಂದವನ್ನು ಮಾಡಿಕೊಳ್ಳಲು ಅಪೇಕ್ಷಿಸಿದ್ದೇನೆ. ನಾನು
ನಿನಗೆ ಬೆಳ್ಳಿಬಂಗಾರಗಳನ್ನು ಕಾಣಿಕೆಯಾಗಿ ಕಳುಹಿಸು
ತ್ತಿದ್ದೇನೆ. ಇಸ್ರೇಲಿನ ರಾಜನಾದ ಬಾಷನೊಂದಿಗೆ
ನಿನಗಿರುವ ಒಪ್ಪಂದವನ್ನು ಮುರಿದುಬಿಡು. ಆಗ ಬಾಷನು
ನನ್ನ ದೇಶವನ್ನು ಬಿಟ್ಟುಹೋಗುತ್ತಾನೆ.''

[20]ರಾಜನಾದ ಬೆನ್ಹದದನು ರಾಜನಾದ ಆಸನ ಜೊತೆ
ಒಪ್ಪಂದ ಮಾಡಿಕೊಂಡನು. ಆದುದರಿಂದ ಅವನು ತನ್ನ
ಸೈನ್ಯವನ್ನು ಇಸ್ರೇಲಿನ ಪಟ್ಟಣಗಳ ವಿರುದ್ಧ ಹೋರಾಡಲು
ಕಳುಹಿಸಿದನು. ಬೆನ್ಹದದನು ಇಯ್ಯೋನ್, ದಾನ್,
ಅಬೇಲ್ಬೇತ್ಮಾಕಾ ಪಟ್ಟಣಗಳನ್ನು ಮತ್ತು ಗಲಿಲೇಯ
ಸರೋವರದ ಸುತ್ತಲಿನ ಎಲ್ಲಾ ಪಟ್ಟಣಗಳನ್ನು ಸೋಲಿಸಿ
ದನು. ಅವನು ನಫ್ತಾಲಿ ಪ್ರದೇಶವನ್ನೆಲ್ಲ ಸೋಲಿಸಿದನು.
[21] ಈ ಆಕ್ರಮಣದ ಸುದ್ದಿಯು ಬಾಷನಿಗೆ ತಿಳಿಯಿತು.
ಆದುದರಿಂದ ಅವನು ರಾಮ ನಗರವನ್ನು ಬಲಪಡಿಸಲು
ತಾನು ಕೈಗೊಂಡಿದ್ದ ಕೆಲಸವನ್ನು ನಿಲ್ಲಿಸಿದನು. ಅವನು ಆ
ಪಟ್ಟಣದಿಂದ ತಿರ್ಚಗೆ ಹಿಂದಿರುಗಿದನು. [22]ಆಗ ರಾಜ
ನಾದ ಆಸನು ಯೆಹೂದದ ಜನರಿಗೆಲ್ಲ ಒಂದು ಆಜ್ಞೆ
ಯನ್ನು ಮಾಡಿದನು. ಆದ್ದರಿಂದ ಪ್ರತಿಯೊಬ್ಬ ವ್ಯಕ್ತಿಯೂ
ಸಹಾಯ ಮಾಡಬೇಕಾಯಿತು. ಬಾಷನು ರಾಮನಗರ
ವನ್ನು ಬಲಪಡಿಸಲೆಂದು ಉಪಯೋಗಿಸುತ್ತಿದ್ದ ಎಲ್ಲಾ
ಕಲ್ಲುಗಳನ್ನು ಮತ್ತು ಮರಗಳನ್ನು ಅವರು ರಾಮಕ್ಕೆ
ಹೋಗಿ ತೆಗೆದುಕೊಂಡು ಬಂದರು. ಅವರು ಆ ವಸ್ತು
ಗಳನ್ನು ಬೆನ್ಯಾಮೀನ್ ದೇಶದ ಗೆಬಕ್ಕೆ ಮತ್ತು ಮಿಚ್ಪೆಗಳಿಗೆ
ತೆಗೆದುಕೊಂಡು ಹೋದರು. ನಂತರ ರಾಜನಾದ ಆಸನು
ಆ ಪಟ್ಟಣಗಳನ್ನು ಮತ್ತಷ್ಟು ಬಲಪಡಿಸಿದನು.
[23]ಆಸನು ಮಾಡಿದ ಮಹಾಕಾರ್ಯಗಳನ್ನೂ ಅವನು
ಕಟ್ಟಿಸಿದ ನಗರಗಳನ್ನೂ ಮತ್ತು ಅವನನ್ನು ಕುರಿತ ಇತರ
ಸಂಗತಿಗಳನ್ನೂ ''ಯೆಹೂದದ ರಾಜರುಗಳ ಚರಿತ್ರೆ''
ಎಂಬ ಪುಸ್ತಕದಲ್ಲಿ ಬರೆದಿದ್ದಾರೆ. ಆಸನಿಗೆ ವಯಸ್ಸಾದಾಗ,
ಅವನ ಕಾಲುಗಳಿಗೆ ರೋಗವಾಗಿತ್ತು. [24]ಆಸನು ಸತ್ತು
ಹೋದನು. ಅವನನ್ನು ಅವನ ಪೂರ್ವಿಕನಾದ ದಾವೀದ
ನಗರದಲ್ಲಿ ಸಮಾಧಿಮಾಡಿದರು. ಆಸನ ಮಗನಾದ
ಯೆಹೋಷಾಫಾಟನು ಅವನ ನಂತರ ಹೊಸ ರಾಜ
ನಾದನು.

### ನಾದಾಬ ಇಸ್ರೇಲಿನ ರಾಜ

[25]ಆಸನು ಯೆಹೂದದ ರಾಜನಾಗಿದ್ದ ಎರಡನೆಯ
ವರ್ಷದಲ್ಲಿ, ಯಾರೊಬ್ಬಾಮನ ಮಗನಾದ ನಾದಾಬನು
ಇಸ್ರೇಲಿನ ರಾಜನಾದನು. ನಾದಾಬನು ಇಸ್ರೇಲನ್ನು
ಎರಡು ವರ್ಷ ಆಳಿದನು. [26]ನಾದಾಬನು ಯೆಹೋವನ
ವಿರುದ್ಧ ಕೆಟ್ಟಕಾರ್ಯಗಳನ್ನು ಮಾಡಿದನು. ತನ್ನ ತಂದೆ
ಯಾದ ಯಾರೊಬ್ಬಾಮನು ಮಾಡಿದ ಪಾಪಗಳನ್ನೇ
ಅವನೂ ಮಾಡಿದನು.ಇಸ್ರೇಲಿನ ಜನರು ಪಾಪಮಾಡು
ವಂತೆ ಯಾರೊಬ್ಬಾಮನು ಪ್ರೇರೇಪಿಸಿದ್ದನು.
[27]ಬಾಷನು ಅಹೀಯನ ಮಗ. ಅವನು ಇಸ್ಸಾಕಾರನ
ಕುಲದವನಾಗಿದ್ದನು. ರಾಜನಾದ ನಾದಾಬನನ್ನು
ಕೊಲ್ಲಲು ಬಾಷನು ಸಂಚು ಮಾಡಿದನು. ನಾದಾಬನು
ಇಸ್ರೇಲರೊಡನೆ ಗಿಬ್ಬೆತೋನ್ ಪಟ್ಟಣದ ವಿರುದ್ಧ
ಹೋರಾಟ ಮಾಡುತ್ತಿದ್ದ ಸಂದರ್ಭವಿದು. ಇದು
ಫಿಲಿಷ್ಟಿಯ ಪಟ್ಟಣ. ಆ ಸ್ಥಳದಲ್ಲಿ ಬಾಷನು ನಾದಾಬನನ್ನು
ಕೊಂದುಹಾಕಿದನು. [28]ಆಸನು ಯೆಹೂದದ ರಾಜ
ನಾಗಿದ್ದ ಮೂರನೆಯ ವರ್ಷದಲ್ಲಿ ಇದು ಸಂಭವಿಸಿತು.
ಅನಂತರ ಬಾಷನು ಇಸ್ರೇಲಿಗೆ ರಾಜನಾದನು.

### ಇಸ್ರೇಲಿನ ರಾಜನಾದ ಬಾಷನು

[29]ಬಾಷನು ಹೊಸರಾಜನಾದ ಸಮಯದಲ್ಲಿ ಅವನು
ಯಾರೊಬ್ಬಾಮನ ವಂಶದಲ್ಲಿ ಎಲ್ಲರನ್ನೂ ಕೊಂದು ಹಾಕಿ
ದನು. ಯಾರೊಬ್ಬಾಮನ ವಂಶದಲ್ಲಿ ಯಾರೂ ಜೀವ
ಸಹಿತ ಉಳಿಯಲು ಬಾಷನು ಬಿಡಲಿಲ್ಲ. ಯೆಹೋವನು
ಹೇಳಿದ್ದಂತೆಯೇ ಇದು ಸಂಭವಿಸಿತು. ಯೆಹೋವನು ತನ್ನ
ಸೇವಕನಾದ ಶೀಲೋವಿನ ಅಹೀಯನ ಮೂಲಕ ಇದನ್ನು
ಹೇಳಿದ್ದನು. [30]ರಾಜನಾದ ಯಾರೊಬ್ಬಾಮನು ಅನೇಕ
ಪಾಪಗಳನ್ನು ಮಾಡಿದ್ದರಿಂದ ಇದು ಸಂಭವಿಸಿತು.
ಇಸ್ರೇಲಿನ ಜನರು ಅನೇಕ ಪಾಪಗಳನ್ನು ಮಾಡುವಂತೆ
ಯಾರೊಬ್ಬಾಮನು ಪ್ರೇರೇಪಿಸಿದ್ದನು. ಇಸ್ರೇಲಿನ ದೇವ
ರಾದ ಯೆಹೋವನು ಹೆಚ್ಚು ಕೋಪಗೊಳ್ಳುವಂತೆ
ಯಾರೊಬ್ಬಾಮನು ಮಾಡಿದ್ದನು. [31] ನಾದಾಬನು
ಮಾಡಿದ ಇತರ ಕಾರ್ಯಗಳ ಬಗ್ಗೆ, ''ಇಸ್ರೇಲಿನ ರಾಜರು
ಗಳ ಇತಿಹಾಸ'' ಎಂಬ ಪುಸ್ತಕದಲ್ಲಿ ಬರೆದಿದ್ದಾರೆ.
[32]ಬಾಷನು ಇಸ್ರೇಲನ್ನು ಆಳುತ್ತಿದ್ದ ಕಾಲದಲ್ಲೆಲ್ಲಾ,
ಯೆಹೂದದ ರಾಜನಾದ ಆಸನ ವಿರುದ್ಧವಾಗಿ ಯುದ್ಧ
ಮಾಡುತ್ತಲೇ ಇದ್ದನು. [33]ಆಸನು ಯೆಹೂದದ ರಾಜ
ನಾದ ಮೂರನೆಯ ವರ್ಷದಲ್ಲಿ, ಅಹೀಯನ ಮಗನಾದ
ಬಾಷನು ಇಡೀ ಇಸ್ರೇಲಿಗೆ ರಾಜನಾದನು. ಅವನ ರಾಜ
ಧಾನಿಯಾದ ತಿರ್ಚದಲ್ಲಿ, ಅವನು ಇಪ್ಪತ್ತನಾಲ್ಕು ವರ್ಷ
ಆಳಿದನು. [34]ಯೆಹೋವನು ತಪ್ಪೆಂದು ಹೇಳಿದ ಕಾರ್ಯ
ಗಳನ್ನು ಬಾಷನು ಮಾಡಿದನು. ಅವನು ತನ್ನ ತಂದೆಯಾದ
ಯಾರೊಬ್ಬಾಮನು ಮಾಡಿದ ಪಾಪಗಳನ್ನೇ ಮಾಡಿದನು.
ಪಾಪಗಳನ್ನು ಮಾಡುವಂತೆ ಯಾರೊಬ್ಬಾಮನು ಇಸ್ರೇಲ
ರನ್ನೂ ಪ್ರೇರೇಪಿಸಿದ್ದನು.

16 ಆಗ ಯೆಹೋವನು ಹನಾನೀಯ ಮಗನಾದ
ಯೇಹುವಿನೊಂದಿಗೆ ಮಾತನಾಡಿ ರಾಜನಾದ
ಬಾಷನ ವಿರುದ್ಧವಾಗಿ ಹೀಗೆ ಹೇಳಿದನು: [2]''ನಾನು
ನಿನ್ನನ್ನು ಪ್ರಾಮುಖ್ಯ ವ್ಯಕ್ತಿಯನ್ನಾಗಿ ಮಾಡಿದೆ. ಇಸ್ರೇಲಿನ
ಜನರಿಗೆ ನಿನ್ನನ್ನು ರಾಜನನ್ನಾಗಿ ನಾನು ಮಾಡಿದೆ.ಆದರೆ
ನೀನು ಯಾರೊಬ್ಬಾಮನ ಮಾರ್ಗವನ್ನೇ ಅನುಸರಿಸಿದೆ.
ಇಸ್ರೇಲಿನ ನನ್ನ ಜನರು ಪಾಪಮಾಡುವಂತೆ ನೀನು
ಪ್ರೇರೇಪಿಸಿದೆ. ಅವರು ತಮ್ಮ ಪಾಪಗಳಿಂದ ನನ್ನನ್ನು
ಕೋಪಗೊಳಿಸಿದರು. [3]ಆದುದರಿಂದ ಬಾಷನೇ,

ನಿನ್ನನ್ನೂ ನಿನ್ನ ಕುಟುಂಬವನ್ನೂ ನಾನು ನಾಶಪಡಿಸು
ತ್ತೇನೆ. ನೆಬಾಟನ ಮಗನಾದ ಯಾರೊಬ್ಬಾಮನ
ಕುಟುಂಬಕ್ಕೆ ನಾನು ಮಾಡಿದಂತೆ ನಿನಗೂ ಮಾಡುತ್ತೇನೆ.
4ನಿನ್ನ ಕುಟುಂಬದ ಜನರು ನಗರದ ಬೀದಿಗಳಲ್ಲಿ ಸಾಯು
ತ್ತಾರೆ; ಅವರ ದೇಹಗಳನ್ನು ನಾಯಿಗಳು ತಿನ್ನುತ್ತವೆ. ನಿನ್ನ
ಕುಟುಂಬದ ಕೆಲವು ಜನರು ಹೊಲಗಳಲ್ಲಿ ಸಾಯುತ್ತಾರೆ.
ಅವರ ದೇಹಗಳನ್ನು ಪಕ್ಷಿಗಳು ತಿನ್ನುತ್ತವೆ.’’

5ಬಾಷನು ಮಾಡಿದ ಎಲ್ಲ ಕಾರ್ಯಗಳ ಬಗ್ಗೆ ಮತ್ತು
ಅವನ ಮಹಾಕಾರ್ಯಗಳ ಬಗ್ಗೆ, ‘‘ಇಸ್ರೇಲಿನ ರಾಜರು
ಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ ಬರೆದಿದ್ದಾರೆ.
6ಬಾಷನು ಸತ್ತುಹೋದನು. ಅವನನ್ನು ತಿರ್ಚದಲ್ಲಿ
ಸಮಾಧಿ ಮಾಡಿದರು. ಅವನ ಮಗನಾದ ಏಲನು ಅವನ
ನಂತರ ಹೊಸರಾಜನಾದನು.

7ಯೆಹೋವನು ಪ್ರವಾದಿಯಾದ ಯೇಹುವಿಗೆ ಒಂದು
ಸಂದೇಶವನ್ನು ನೀಡಿದನು. ಈ ಸಂದೇಶವು ಬಾಷನ
ಮತ್ತು ಅವನ ಕುಟುಂಬದ ವಿರುದ್ಧವಾಗಿತ್ತು. ಬಾಷನು
ಯೆಹೋವನ ವಿರುದ್ಧವಾಗಿ ದುರಾಚಾರವನ್ನೆಸಗಿದನು.
ಇದು ಯೆಹೋವನಿಗೆ ಹೆಚ್ಚು ಕೋಪವನ್ನು ಉಂಟು
ಮಾಡಿತು. ಯಾರೊಬ್ಬಾಮನ ಕುಟುಂಬವು ಅವನಿಗಿಂತ
ಮುಂಚೆ ಮಾಡಿದ ಕಾರ್ಯಗಳನ್ನೇ ಬಾಷನೂ
ಮಾಡಿದನು. ಬಾಷನು ಯಾರೊಬ್ಬಾಮನ ಕುಟುಂಬದ
ವರನ್ನೆಲ್ಲಾ ಕೊಂದುಹಾಕಿದ್ದಕ್ಕಾಗಿಯೂ ಯೆಹೋವನು
ಕೋಪಗೊಂಡನು.

### ಇಸ್ರೇಲಿನ ರಾಜನಾದ ಏಲ

8ಆಸನು ಯೆಹೂದದ ರಾಜನಾದ ಇಪ್ಪತ್ತಾರನೆಯ
ವರ್ಷದಲ್ಲಿ ಏಲನು ಇಸ್ರೇಲಿನ ರಾಜನಾದನು. ಏಲನು
ಬಾಷನ ಮಗ. ಅವನು ತಿರ್ಚದಲ್ಲಿ ಎರಡು ವರ್ಷ
ಆಳಿದನು.

9ಜಿಮ್ರಿಯು ಏಲನ ಅಧಿಕಾರಿಗಳಲ್ಲಿ ಒಬ್ಬನಾಗಿದ್ದನು.
ಏಲನ ರಥಬಲದ ಅರ್ಧಭಾಗಕ್ಕೆ ಜಿಮ್ರಿಯು ಅಧಿಪತಿ.
ಆದರೆ ಏಲನ ವಿರುದ್ಧ ಜಿಮ್ರಿಯು ಸಂಚುಮಾಡಿದನು.
ರಾಜನಾದ ಏಲನು ತಿರ್ಚದಲ್ಲಿದ್ದನು. ಅವನು ಅರ್ಚನ
ಮನೆಯಲ್ಲಿ ಕುಡಿದು ಮತ್ತನಾದನು. ಅರ್ಚನು ತಿರ್ಚ
ದಲ್ಲಿದ್ದ ಅರಮನೆಯ ಮೇಲ್ವಿಚಾರಕ. 10ಜಿಮ್ರಿಯು ಆ
ಮನೆಯೊಳಕ್ಕೆ ಹೋಗಿ ರಾಜನಾದ ಏಲನನ್ನು ಕೊಂದು
ಹಾಕಿದನು. ಆಸನು ಯೆಹೂದದ ರಾಜನಾಗಿದ್ದ ಇಪ್ಪತ್ತೇಳ
ನೆಯ ವರ್ಷದಲ್ಲಿ ಇದು ನಡೆಯಿತು. ಏಲನ ನಂತರ
ಜಿಮ್ರಿಯು ಇಸ್ರೇಲಿನ ಹೊಸ ರಾಜನಾದನು.

### ಇಸ್ರೇಲಿನ ರಾಜನಾದ ಜಿಮ್ರಿ

11ಜಿಮ್ರಿಯು ಹೊಸ ರಾಜನಾದ ಮೇಲೆ ಬಾಷನ
ಕುಟುಂಬದವರನ್ನೆಲ್ಲಾ ಕೊಂದುಹಾಕಿದನು. ಅವನು
ಬಾಷನ ಕುಟುಂಬದಲ್ಲಿ ಯಾವ ಗಂಡಸನ್ನೂ ಬಿಡಲಿಲ್ಲ.
ಬಾಷನ ಸ್ನೇಹಿತರನ್ನೂ ಜಿಮ್ರಿಯು ಕೊಂದುಹಾಕಿದನು.
12ಹೀಗೆ ಜಿಮ್ರಿಯು ಬಾಷನ ಕುಟುಂಬವನ್ನು ನಾಶ
ಗೊಳಿಸಿದನು. ಬಾಷನ ವಿರುದ್ಧವಾಗಿ ಯೆಹೋವನು
ಪ್ರವಾದಿಯಾದ ಯೇಹುವಿನ ಮೂಲಕ ತಿಳಿಸಿದಂತೆ ಇದು
ಸಂಭವಿಸಿತು. 13ಬಾಷನ ಮತ್ತು ಅವನ ಮಗನಾದ ಏಲನ
ಪಾಪಗಳೇ ಅದಕ್ಕೆ ಕಾರಣ. ಅವರು ಪಾಪಗಳನ್ನು ಮಾಡಿ
ದರು ಮತ್ತು ಪಾಪಗಳನ್ನು ಮಾಡುವಂತೆ ಇಸ್ರೇಲಿನ
ಜನರನ್ನು ಪ್ರೇರೇಪಿಸಿದರು. ಅವರಲ್ಲಿ ಅನೇಕ ವಿಗ್ರಹ
ಗಳಿದ್ದುದರಿಂದ ಯೆಹೋವನು ಕೋಪಗೊಂಡನು.

14ಏಲನು ಮಾಡಿದ ಇತರ ಕಾರ್ಯಗಳ ಬಗ್ಗೆ,
‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ
ಬರೆದಿದ್ದಾರೆ. 15ಆಸನು ಯೆಹೂದದ ರಾಜನಾದ ಇಪ್ಪತ್ತೇ
ಳನೆಯ ವರ್ಷದಲ್ಲಿ ಜಿಮ್ರಿಯು ಇಸ್ರೇಲಿನ ರಾಜ
ನಾದನು. ಜಿಮ್ರಿಯು ತಿರ್ಚದಲ್ಲಿ ಏಳು ದಿನ ಆಳಿದನು.
ಆಗ ಸಂಭವಿಸಿದ್ದೇನಂದರೆ: ಇಸ್ರೇಲಿನ ಸೈನ್ಯವು ಫಿಲಿಷ್ಟಿ
ಯರಿಗೆ ಸೇರಿದ್ದ ಗಿಬ್ಬೆತೋನಿನ ವಿರುದ್ಧ ಮುತ್ತಿಗೆ
ಹಾಕಿದ್ದರು. ಅವರು ಯುದ್ಧಕ್ಕೆ ಸಿದ್ಧರಾಗಿದ್ದರು. 16ರಾಜನ
ವಿರುದ್ಧ ಜಿಮ್ರಿಯು ರಹಸ್ಯ ಯೋಜನೆಗಳನ್ನು ಮಾಡಿದ್ದಾ
ನೆಂಬುದು ಪಾಳೆಯದಲ್ಲಿದ್ದ ಜನರಿಗೆ ತಿಳಿಯಿತು. ಅವನು
ರಾಜನನ್ನು ಕೊಂದುಹಾಕಿದನೆಂಬುದು ಅವರಿಗೆ ತಿಳಿ
ಯಿತು. ಆದುದರಿಂದ ಇಸ್ರೇಲರೆಲ್ಲರೂ ಆ ದಿನವೇ
ಪಾಳೆಯದಲ್ಲಿ ಒಮ್ರಿಯನ್ನು ಇಸ್ರೇಲಿನ ರಾಜನನ್ನಾಗಿ
ಮಾಡಿದರು. ಒಮ್ರಿಯು ಸೈನ್ಯದ ಅಧಿಪತಿಯಾಗಿದ್ದನು.
17ಒಮ್ರಿಯು ಇಸ್ರೇಲರೆಲ್ಲರೊಡನೆ ಗಿಬ್ಬೆತೋನನ್ನು
ಬಿಟ್ಟು ತಿರ್ಚಕ್ಕೆ ಮುತ್ತಿಗೆ ಹಾಕಿದನು.

18ಆ ನಗರವು ವಶವಾದುದನ್ನು ಜಿಮ್ರಿಯು ಕಂಡು
ಅರಮನೆಯೊಳಕ್ಕೆ ಹೋಗಿ ಬೆಂಕಿಯನ್ನು ಹತ್ತಿಸಿದನು.
ಅವನು ಅರಮನೆಯನ್ನು ಸುಟ್ಟು ಹಾಕಿ ತಾನೂ ಸುಟ್ಟು
ಕೊಂಡನು.

19ಜಿಮ್ರಿಯು ತಾನು ಮಾಡಿದ ಪಾಪದ ಕಾರಣ
ದಿಂದಲೇ ಸತ್ತುಹೋದನು. ಯೆಹೋವನು ತಪ್ಪೆಂದು
ಹೇಳಿದ ಕಾರ್ಯಗಳನ್ನು ಜಿಮ್ರಿಯು ಮಾಡಿದನು.
ಯಾರೊಬ್ಬಾಮನು ಪಾಪಮಾಡಿದಂತೆ ಅವನೂ ಪಾಪ
ವನ್ನು ಮಾಡಿದನು. ಇಸ್ರೇಲಿನ ಜನರು ಪಾಪಮಾಡುವಂತೆ
ಯಾರೊಬ್ಬಾಮನು ಪ್ರೇರೇಪಿಸಿದ್ದನು.

20ಜಿಮ್ರಿಯ ರಹಸ್ಯ ಯೋಜನೆಗಳ ಕುರಿತಾಗಿಯೂ
ಅವನು ಮಾಡಿದ ಇತರ ಕಾರ್ಯಗಳ ಕುರಿತಾಗಿಯೂ
‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ
ಬರೆದಿದ್ದಾರೆ, ಜಿಮ್ರಿಯು ರಾಜನಾದ ಏಲಾಗೆ ವಿರುದ್ಧ
ವಾಗಿ ತಿರುಗಿಬಿದ್ದಾಗ ಸಂಭವಿಸಿದ ಘಟನೆಗಳನ್ನೂ ಆ
ಪುಸ್ತಕದಲ್ಲಿ ಬರೆಯಲಾಗಿದೆ.

### ಇಸ್ರೇಲಿನ ರಾಜನಾದ ಒಮ್ರಿ

21ಇಸ್ರೇಲಿನ ಜನರಲ್ಲಿ ಎರಡು ಪಕ್ಷಗಳಾದವು.
ಗೀನತನ ಮಗನಾದ ತಿಬ್ನಿಯನ್ನು ಒಂದು ಪಕ್ಷದವರು
ಅನುಸರಿಸಿ, ಅವನನ್ನು ತಮ್ಮ ರಾಜನನ್ನಾಗಿ ಮಾಡಲು
ಅಪೇಕ್ಷೆಪಟ್ಟರು. ಮತ್ತೊಂದು ಪಕ್ಷದವರು ಒಮ್ರಿಯನ್ನು
ಅನುಸರಿಸಿದರು. 22ಆದರೆ ಗೀನತನ ಮಗ ತಿಬ್ನಿಯ
ಹಿಂಬಾಲಕರಿಗಿಂತಲೂ ಒಮ್ರಿಯ ಹಿಂಬಾಲಕರು ಬಲ
ಶಾಲಿಗಳಾಗಿದ್ದರು. ಆದುದರಿಂದ ತಿಬ್ನಿಯನ್ನು ಕೊಲ್ಲ
ಲಾಯಿತು; ಒಮ್ರಿಯು ರಾಜನಾದನು.

23ಆಸನು ಯೆಹೂದದ ರಾಜನಾಗಿದ್ದ ಮೂವ
ತ್ತೊಂದನೇ ವರ್ಷದಲ್ಲಿ ಒಮ್ರಿಯು ಇಸ್ರೇಲಿನ ರಾಜ
ನಾದನು. ಒಮ್ರಿಯು ಇಸ್ರೇಲನ್ನು ಹನ್ನೆರಡು ವರ್ಷ
ಆಳಿದನು. ಆ ಹನ್ನೆರಡು ವರ್ಷಗಳಲ್ಲಿ ಆರು ವರ್ಷ ಅವನು
ತಿರ್ಚದಲ್ಲಿ ಆಳಿದನು. 24ಆದರೆ ಒಮ್ರಿಯು ಸಮಾರ್ಯ
ಬೆಟ್ಟವನ್ನು ಶೆಮೆರನಿಂದ ಅರವತ್ತೆಂಟು ಕಿಲೋ.ಗ್ರಾಂ.
ಬೆಳ್ಳಿಗೆ ಕೊಂಡುಕೊಂಡನು. ಒಮ್ರಿಯು ಆ ಬೆಟ್ಟದ
ಮೇಲೆ ಒಂದು ನಗರವನ್ನು ಕಟ್ಟಿಸಿದನು. ಅವನು ಆ
ನಗರಕ್ಕೆ ಸಮಾರ್ಯವೆಂದು ಅದರ ಒಡೆಯನಾದ
ಶೆಮೆರನ ಹೆಸರನ್ನು ಇಟ್ಟನು.

25ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯ
ಗಳನ್ನೆಲ್ಲ ಒಮ್ರಿಯು ಮಾಡಿದನು. ಒಮ್ರಿಯು ಅವನಿ
ಗಿಂತಲೂ ಮುಂಚೆ ಇದ್ದ ರಾಜರುಗಳಲ್ಲೆಲ್ಲಾ ಅತ್ಯಂತ
ಕೆಟ್ಟವನು.

26ನೆಬಾಟನ ಮಗನಾದ ಯಾರೊಬ್ಬಾಮನು ಮಾಡಿ
ದಂತಹ ಪಾಪಗಳನ್ನೇ ಅವನೂ ಮಾಡಿದನು, ಇಸ್ರೇಲಿನ
ಜನರು ಪಾಪಮಾಡುವಂತೆ ಯಾರೊಬ್ಬಾಮನು ಪ್ರೇರೇ
ಪಿಸಿದ್ದನು. ಆದುದರಿಂದ ಅವರು ಇಸ್ರೇಲಿನ ದೇವರಾದ
ಯೆಹೋವನನ್ನು ಹೆಚ್ಚು ಕೋಪಗೊಳಿಸಿದರು. ಅವರು
ನಿಷ್ಪ್ರಯೋಜಕವಾದ ವಿಗ್ರಹಗಳನ್ನು ಆರಾಧಿಸಿದ್ದರಿಂದ
ಯೆಹೋವನು ಕೋಪಗೊಂಡನು.

27ಒಮ್ರಿಯ ಕುರಿತಾದ ಇತರ ಸಂಗತಿಗಳನ್ನೂ ಅವನ
ಪರಾಕ್ರಮಗಳನ್ನೂ ''ಇಸ್ರೇಲಿನ ರಾಜರುಗಳ ಇತಿಹಾಸ''
ಎಂಬ ಪುಸ್ತಕದಲ್ಲಿ ಬರೆದಿದ್ದಾರೆ. 28ಒಮ್ರಿಯು ಸತ್ತು
ಹೋದನು; ಅವನನ್ನು ಸಮಾರ್ಯದಲ್ಲಿ ಸಮಾಧಿ ಮಾಡಿ
ದರು, ಅವನ ನಂತರ ಅವನ ಮಗನಾದ ಅಹಾಬನು ಹೊಸ
ರಾಜನಾದನು.

### ಇಸ್ರೇಲಿನ ರಾಜನಾದ ಅಹಾಬ

29ಆಸನು ಯೆಹೂದದ ರಾಜನಾಗಿದ್ದ ಮೂವತ್ತೆಂಟನೇ
ವರ್ಷದಲ್ಲಿ ಒಮ್ರಿಯ ಮಗನಾದ ಅಹಾಬನು ಇಸ್ರೇಲಿನ
ರಾಜನಾದನು. ಅಹಾಬನು ಇಸ್ರೇಲನ್ನು ಸಮಾರ್ಯ
ಪಟ್ಟಣದಲ್ಲಿ ಇಪ್ಪತ್ತೆರಡು ವರ್ಷ ಆಳಿದನು. 30ಯೆಹೋ
ವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು ಅಹಾಬನು
ಮಾಡಿದನು. ಅವನಿಗಿಂತಲೂ ಮುಂಚೆ ಇದ್ದ
ರಾಜರುಗಳಲ್ಲೆಲ್ಲಾ ಅಹಾಬನೇ ಅತ್ಯಂತ ಕೆಟ್ಟವನು.
31ನೆಬಾಟನ ಮಗನಾದ ಯಾರೊಬ್ಬಾಮನು ಮಾಡಿ
ದಂತಹ ಪಾಪಗಳನ್ನೇ ಅಹಾಬನು ಮಾಡಿದರೂ ಅವು ಅವ
ನಿಗೆ ಸಾಕಾಗಲಿಲ್ಲ. ಆದುದರಿಂದ ಅಹಾಬನು ಎತ್ಬಾಳನ
ಮಗಳಾದ ಈಜೆಬೆಲಳನ್ನು ಮದುವೆಯಾದನು.
ಎತ್ಬಾಳನು ಚೀದೋನ್ಯರ ರಾಜನಾಗಿದ್ದನು. ನಂತರ
ಅಹಾಬನು ಬಾಳ್ ದೇವರನ್ನು ಪೂಜಿಸಿ ಅದರ ಸೇವೆ
ಮಾಡಲಾರಂಭಿಸಿದನು.

32ಬಾಳನನ್ನು ಪೂಜಿಸಲು ಅಹಾಬನು ಸಮಾರ್ಯದಲ್ಲಿ
ಒಂದು ಗುಡಿಯನ್ನು ಕಟ್ಟಿಸಿದನು. ಆ ಗುಡಿಯಲ್ಲಿ ಒಂದು
ಯಜ್ಞವೇದಿಕೆಯನ್ನು ಕಟ್ಟಿಸಿದನು.

33ಅಹಾಬನು ಅಶೇರ ದೇವತೆಯನ್ನು ಆರಾಧಿಸಲು
ಒಂದು ವಿಶೇಷ ಸ್ತಂಭವನ್ನು ನೆಡಿಸಿದನು. ಹೀಗೆ ಎಷ್ಟೋ
ಕೆಟ್ಟಕಾರ್ಯಗಳನ್ನು ಮಾಡಿ ತನ್ನ ಮುಂಚೆ ಇದ್ದ ಇಸ್ರೇಲ್
ರಾಜರುಗಳಿಗಿಂತಲೂ ಹೆಚ್ಚಾಗಿ ಇಸ್ರೇಲ್ ದೇವರಾದ
ಯೆಹೋವನನ್ನು ರೇಗಿಸಿದನು.

34ಅಹಾಬನ ಕಾಲದಲ್ಲಿ ಬೇತೇಲಿನ ಹೀಯೇಲನು
ಜೆರಿಕೋ ಪಟ್ಟಣವನ್ನು ಮತ್ತೆ ನಿರ್ಮಿಸಿದನು.
ಹೀಯೇಲನು ನಗರದಲ್ಲಿ ಈ ಕೆಲಸವನ್ನು ಮಾಡಲು
ಆರಂಭಿಸಿದ ಕಾಲದಲ್ಲಿಯೇ ಅವನ ಹಿರಿಯ ಮಗನಾದ
ಅಬೀರಾಮನು ಸತ್ತುಹೋದನು. ಹೀಯೇಲನು ನಗರದ
ಬಾಗಿಲುಗಳನ್ನು ಕಟ್ಟಿಸಿದಾಗ, ಅವನ ಕಿರಿಯ ಮಗನಾದ
ಸೆಗೂಬನು ಸತ್ತುಹೋದನು. ಯೆಹೋವನು ಹೇಳಿ
ದಂತೆಯೇ ಇದು ಸಂಭವಿಸಿತು. ನೂನನ ಮಗನಾದ
ಯೆಹೋಶುವನ ಮೂಲಕ ಯೆಹೋವನು ಇದನ್ನು
ತಿಳಿಸಿದ್ದನು.'' *

### ಎಲೀಯ ಮತ್ತು ಬರಗಾಲ

17 ಎಲೀಯನು ಗಿಲ್ಯಾದಿನ ತಿಷ್ಬೀ ಪಟ್ಟಣದ ಒಬ್ಬ
ಪ್ರವಾದಿ. ಎಲೀಯನು ರಾಜನಾದ ಅಹಾಬನಿಗೆ,
''ನಾನು ಇಸ್ರೇಲರ ದೇವರಾದ ಯೆಹೋವನ ಸೇವಕ
ನಾಗಿದ್ದೇನೆ. ಮುಂದಿನ ಕೆಲವು ವರ್ಷಗಳವರೆಗೆ ಹಿಮ
ವಾಗಲೀ ಮಳೆಯಾಗಲೀ ಬೀಳುವುದಿಲ್ಲವೆಂದು ನಾನು
ಆತನ ಹೆಸರಿನ ಮೇಲೆ ಪ್ರಮಾಣ ಮಾಡುತ್ತೇನೆ. ನಾನು
ಬೀಳುವಂತೆ ಮಳೆಗೆ ಆಜ್ಞಾಪಿಸಿದರೆ ಮಾತ್ರ ಅದು
ಬೀಳುತ್ತದೆ'' ಎಂದು ಹೇಳಿದನು.

---

**ನೂನನ ...ತಿಳಿಸಿದ್ದನು** ಯೆಹೋಶುವನು ಜೆರಿಕೋವನ್ನು ನಾಶ
ಗೊಳಿಸಿದಾಗ, ಈ ನಗರವನ್ನು ಯಾರೇ ಆಗಲಿ ಮತ್ತೆ ಕಟ್ಟಿದರೆ ಅವರು
ತಮ್ಮ ಹಿರಿಯ ಮಗನನ್ನು ಮತ್ತು ಕಿರಿಯ ಮಗನನ್ನು ಕಳೆದು
ಕೊಳ್ಳುತ್ತಾರೆಂದು ಅವನು ಹೇಳಿದ್ದನು.

2ನಂತರ ಯೆಹೋವನು ಎಲೀಯನಿಗೆ, 3‘‘ಈ ಸ್ಥಳ
ವನ್ನು ತ್ಯಜಿಸಿ, ಪೂರ್ವದಿಕ್ಕಿಗೆ ಹೋಗು. ಕೆರೀತ್ ಹಳ್ಳದ
ಹತ್ತಿರ ಅಡಗಿಕೊ. ಆ ಹಳ್ಳವು ಜೋರ್ಡನ್ ನದಿಯ
ಪೂರ್ವದಲ್ಲಿದೆ. 4ನೀನು ಆ ಹಳ್ಳದ ನೀರನ್ನು ಕುಡಿಯ
ಬಹುದು. ಆ ಸ್ಥಳದಲ್ಲಿರುವ ನಿನಗೆ ಆಹಾರವನ್ನು ತಂದು
ಕೊಡಬೇಕೆಂದು ನಾನು ಕಾಗೆಗಳಿಗೆ ಆಜ್ಞಾಪಿಸಿದ್ದೇನೆ’’
ಎಂದು ಹೇಳಿದನು. 5ಆದುದರಿಂದ ಯೆಹೋವನು ಹೇಳಿ
ದಂತೆ ಅವನು ಮಾಡಿದನು. ಅವನು ಜೋರ್ಡನ್
ನದಿಯ ಪೂರ್ವಕ್ಕಿರುವ ಕೆರೀತ್ ಹಳ್ಳದ ಹತ್ತಿರ ವಾಸಿ
ಸಲು ಹೋದನು. 6ಕಾಗೆಗಳು ಪ್ರತಿ ಮುಂಜಾನೆ ಮತ್ತು
ಸಂಜೆ ಎಲೀಯನಿಗೆ ರೊಟ್ಟಿ ಮತ್ತು ಮಾಂಸವನ್ನು ತಂದು
ಕೊಡುತ್ತಿದ್ದವು. ಎಲೀಯನು ಹಳ್ಳದ ನೀರನ್ನು ಕುಡಿ
ಯುತ್ತಿದ್ದನು.

7ಅಲ್ಲಿಯೂ ಮಳೆಯಿಲ್ಲದ್ದರಿಂದ, ಸ್ವಲ್ಪಕಾಲದ ಬಳಿಕ
ಹಳ್ಳವೂ ಬತ್ತಿಹೋಯಿತು. 8ನಂತರ ಯೆಹೋವನು
ಎಲೀಯನಿಗೆ, 9‘‘ಚೀದೋನ್ಯರ ಚಾರೆಪ್ತಗೆ ಹೋಗಿ. ಅಲ್ಲಿ
ವಾಸಮಾಡು. ಆ ಸ್ಥಳದಲ್ಲಿ ಒಬ್ಬ ವಿಧವೆಯು ವಾಸಿಸು
ತ್ತಾಳೆ. ನಿನಗೆ ಆಹಾರವನ್ನು ಕೊಡುವಂತೆ ಅವಳಿಗೆ ನಾನು
ಆಜ್ಞಾಪಿಸಿದ್ದೇನೆ’’ ಎಂದು ಹೇಳಿದನು.

10ಎಲೀಯನು ಚಾರೆಪ್ತಗೆ ಹೋದನು. ಅವನು ಊರು
ಬಾಗಿಲಿಗೆ ಹೋದಾಗ, ಅಲ್ಲಿ ಒಬ್ಬ ವಿಧವೆಯನ್ನು
ನೋಡಿದನು. ಆ ಸ್ತ್ರೀಯು ಬೆಂಕಿಗಾಗಿ ಸೌದೆಯನ್ನು
ಒಟ್ಟುಗೂಡಿಸುತ್ತಿದ್ದಳು. ಎಲೀಯನು ಅವಳಿಗೆ, ‘‘ನಾನು
ಕುಡಿಯುವುದಕ್ಕೆ ಚಂಬಿನಲ್ಲಿ ಸ್ವಲ್ಪ ನೀರನ್ನು ನೀನು
ತರುವೆಯಾ?’’ ಎಂದು ಕೇಳಿದನು. 11ಆ ಸ್ತ್ರೀಯು ಅವ
ನಿಗೆ ನೀರನ್ನು ತರಲು ಹೋಗುತ್ತಿರುವಾಗ, ಎಲೀಯನು,
‘‘ದಯವಿಟ್ಟು ಒಂದು ಚೂರು ರೊಟ್ಟಿಯನ್ನು ತೆಗೆದು
ಕೊಂಡು ಬಾ ’’ ಎಂದು ಹೇಳಿದನು.

12ಆ ಸ್ತ್ರೀಯು ‘‘ನನ್ನಲ್ಲಿ ರೊಟ್ಟಿಯಿಲ್ಲವೆಂದು ನಿನ್ನ
ದೇವರಾದ ಯೆಹೋವನ ಸನ್ನಿಧಿಯಲ್ಲಿ ನಾನು ಪ್ರಮಾಣ
ಮಾಡುತ್ತೇನೆ. ನನ್ನ ಮಡಕೆಯಲ್ಲಿ ಸ್ವಲ್ಪ ಹಿಟ್ಟು ಮಾತ್ರ
ಇದೆ; ಪಾತ್ರೆಯಲ್ಲಿ ಸ್ವಲ್ಪ ಆಲೀವ್ ಎಣ್ಣೆಯಿದೆ. ಬೆಂಕಿ
ಹೊತ್ತಿಸಲು ಸೌದೆ ಚೂರುಗಳನ್ನು ಆಯ್ದು ಕೊಳ್ಳವುದ
ಕ್ಕಾಗಿ ನಾನು ಈ ಸ್ಥಳಕ್ಕೆ ಬಂದೆ. ಸೌಧೆಯನ್ನು ನಾನು
ಮನೆಗೆ ತೆಗೆದುಕೊಂಡು ಹೋಗಿ, ನಮ್ಮ ಕೊನೆಯ
ಊಟವನ್ನು ಸಿದ್ಧಪಡಿಸುತ್ತೇನೆ. ನನ್ನ ಮಗ ಮತ್ತು ನಾನು
ಅದನ್ನು ತಿಂದು, ನಂತರ ಹಸಿವಿನಿಂದ ಸಾಯುತ್ತೇವೆ’’
ಎಂದು ಹೇಳಿದಳು.

13ಎಲೀಯನು ಆ ಸ್ತ್ರೀಗೆ, ‘‘ಚಿಂತಿಸದಿರು, ಮನೆಗೆ
ಹೋಗಿ ನೀನು ಹೇಳಿದಂತೆ ಆಹಾರವನ್ನು ಸಿದ್ಧಪಡಿಸು.
ಆದರೆ ನಿನ್ನಲ್ಲಿರುವ ಹಿಟ್ಟಿನಿಂದ ಮೊದಲು ಒಂದು ಚಿಕ್ಕ
ರೊಟ್ಟಿಯನ್ನು ಮಾಡು. ಆ ರೊಟ್ಟಿಯನ್ನು ನನಗೆ ತಂದು
ಕೊಡು; ನಂತರ ನಿನಗೆ ಮತ್ತು ನಿನ್ನ ಮಗನಿಗೆ ಅಡಿಗೆ
ಮಾಡಿಕೋ. 14ಇಸ್ರೇಲಿನ ದೇವರಾದ ಯೆಹೋವನು
ಹೇಳುವುದೇನಂದರೆ, ‘ಆ ಮಡಕೆಯಲ್ಲಿರುವ ಹಿಟ್ಟು
ಎಂದೆಂದಿಗೂ ಖಾಲಿಯಾಗುವುದಿಲ್ಲ. ಆ ಪಾತ್ರೆಯಲ್ಲಿ
ಯಾವಾಗಲೂ ಎಣ್ಣೆಯಿರುತ್ತದೆ. ಯೆಹೋವನು
ಭೂಮಿಯ ಮೇಲೆ ಮಳೆಯನ್ನು ಸುರಿಸುವ ತನಕ ಇದು
ಹೀಗೆಯೇ ಮುಂದುವರಿಯುತ್ತದೆ’’ ಎಂದು ಹೇಳಿದನು.

15ಆ ಸ್ತ್ರೀಯು ತನ್ನ ಮನೆಗೆ ಹೋದಳು. ಎಲೀಯನು
ಹೇಳಿದಂತೆ ಆಕೆಯು ಮಾಡಿದಳು. ಎಲೀಯನು, ಆ
ಸ್ತ್ರೀಯು ಮತ್ತು ಅವಳ ಮಗನೂ ಅನೇಕ ದಿನಗಳಿಗಾಗು
ವಷ್ಟು ಆಹಾರವನ್ನು ಹೊಂದಿದ್ದರು. 16ಮಡಕೆಯಲ್ಲಿದ್ದ
ಹಿಟ್ಟು ಮತ್ತು ಪಾತ್ರೆಯಲ್ಲಿದ್ದ ಎಣ್ಣೆ ಎಂದೆಂದಿಗೂ ಖಾಲಿ
ಯಾಗಲಿಲ್ಲ. ಯೆಹೋವನು ಎಲೀಯನ ಮೂಲಕ
ಹೇಳಿದ್ದಂತೆಯೇ ಇದು ಸಂಭವಿಸಿತು.

17ಸ್ವಲ್ಪಕಾಲದ ತರುವಾಯ ಆ ಸ್ತ್ರೀಯ ಮಗನು
ಅಸ್ವಸ್ಥನಾದನು. ಅವನಿಗೆ ರೋಗವು ಹೆಚ್ಚಾಗುತ್ತಲೇ
ಇತ್ತು. ಕೊನೆಗೆ ಆ ಬಾಲಕನು ಉಸಿರಾಡುವುದನ್ನೇ
ನಿಲ್ಲಿಸಿದನು. 18ಆ ಸ್ತ್ರೀಯು ಎಲೀಯನಿಗೆ, ‘‘ನೀನು ದೇವ
ಮನುಷ್ಯ. ನೀನು ನನಗೆ ಸಹಾಯ ಮಾಡಲು ಬಂದಿರು
ವೆಯಾ? ಅಥವಾ ನನ್ನ ಪಾಪಗಳನ್ನೆಲ್ಲ ನನ್ನ ನೆನಪಿಗೆ
ತಂದುಕೊಳ್ಳುವಂತೆ ಮಾಡಲು, ನನ್ನ ಮಗನಿಗೆ ಸಾವನ್ನು
ಉಂಟು ಮಾಡುವುದಕ್ಕಾಗಿಯೇ ಬಂದಿರುವೆಯಾ?’’
ಎಂದು ಕೇಳಿದಳು.

19ಎಲೀಯನು ಅವಳಿಗೆ, ‘‘ನಿನ್ನ ಮಗನನ್ನು ನನಗೆ
ಕೊಡು’’ ಎಂದು ಹೇಳಿದನು. ಎಲೀಯನು ಬಾಲಕನನ್ನು
ಅವಳಿಂದ ತೆಗೆದುಕೊಂಡು, ಮೇಲಂತಸ್ತಿಗೆ ಹೋದನು.
ಅವನು ನೆಲೆಸಿದ್ದ ಕೊಠಡಿಯ ಹಾಸಿಗೆಯ ಮೇಲೆ ಆ
ಬಾಲಕನನ್ನು ಮಲಗಿಸಿದನು. 20ನಂತರ ಎಲೀಯನು,
‘‘ನನ್ನ ದೇವರಾದ ಯೆಹೋವನೇ, ಈ ವಿಧವೆಯು ತನ್ನ
ಮನೆಯಲ್ಲಿ ನನಗೆ ಸ್ಥಳವನ್ನು ಕೊಟ್ಟಿದ್ದಾಳೆ. ನೀನು
ಅವಳಿಗೆ ಈ ಕೇಡನ್ನು ಮಾಡುವೆಯಾ? ನೀನು ಅವಳ
ಮಗುವನ್ನು ಸಾಯಿಸುವೆಯಾ ?’’ ಎಂದು ಪ್ರಾರ್ಥಿಸಿ
ದನು. 21ಬಳಿಕ ಆ ಬಾಲಕನ ಮೇಲೆ ಎಲೀಯನು
ಮೂರು ಬಾರಿ ಬೋರಲ ಬಿದ್ದು , ‘‘ನನ್ನ ದೇವರಾದ
ಯೆಹೋವನೇ, ಈ ಬಾಲಕನಿಗೆ ಮತ್ತೆ ಜೀವವನ್ನು
ಕೊಡು’’ ಎಂದು ಪ್ರಾರ್ಥಿಸಿದನು.

22ಯೆಹೋವನು ಎಲೀಯನ ಪ್ರಾರ್ಥನೆಗೆ ಕಿವಿ
ಗೊಟ್ಟನು. ಆ ಬಾಲಕನು ಮತ್ತೆ ಉಸಿರಾಡಲಾರಂಭಿಸಿ
ದನು. ಅವನು ಜೀವಂತನಾದನು! 23ಎಲೀಯನು ಆ
ಬಾಲಕನನ್ನು ಕೆಳಅಂತಸ್ತಿಗೆ ಕರೆದೊಯ್ದನು. ಎಲೀಯನು
ಬಾಲಕನನ್ನು ಅವನ ತಾಯಿಗೆ ಒಪ್ಪಿಸಿ, ‘‘ನಿನ್ನ ಮಗ
ಬದುಕಿದ್ದಾನೆ, ನೋಡು’’ ಎಂದು ಹೇಳಿದನು.

24ಆ ಸ್ತ್ರೀಯು, ‘‘ಈಗ ನಿಜವಾಗಿಯೂ ನೀನು ದೇವ
ಮನುಷ್ಯನೆಂಬುದು ನನಗೆ ತಿಳಿಯಿತು. ಯೆಹೋವನು
ನಿನ್ನ ಮೂಲಕ ನಿಜವಾಗಿಯೂ ಮಾತಾಡುತ್ತಾನೆಂಬುದು
ನನಗೆ ತಿಳಿದಿದೆ’’ ಎಂದು ಹೇಳಿದಳು.

### ಎಲೀಯನು ಮತ್ತು ಬಾಳನ ಪ್ರವಾದಿಗಳು

18 ಬರಗಾಲದ ಮೂರನೆ ವರ್ಷದಲ್ಲಿ ಯೆಹೋ
ವನು ಎಲೀಯನಿಗೆ, ‘‘ಹೋಗಿ, ರಾಜನಾದ
ಅಹಾಬನನ್ನು ಭೇಟಿಮಾಡು. ನಾನು ಬೇಗ ಮಳೆಯನ್ನು
ಸುರಿಸುತ್ತೇನೆ’’ ಎಂದು ಹೇಳಿದನು. 2ಎಲೀಯನು ಅಹಾ
ಬನನ್ನು ಭೇಟಿಮಾಡಲು ಹೋದನು.

ಆಗ ಸಮಾರ್ಯದಲ್ಲಿ ಆಹಾರವಿರಲಿಲ್ಲ. 3ರಾಜನಾದ
ಅಹಾಬನು ಓಬದ್ಯನನ್ನು ತನ್ನ ಬಳಿಗೆ ಕರೆಯಿಸಿದನು.
ಓಬದ್ಯನು ರಾಜನ ಅರಮನೆಯ ಮೇಲ್ವಿಚಾರಕನಾಗಿ
ದ್ದನು. (ಓಬದ್ಯನು ಯೆಹೋವನ ನಿಜವಾದ ಹಿಂಬಾಲಕ
ರಲ್ಲಿ ಒಬ್ಬನಾಗಿದ್ದನು. 4ಒಂದು ಕಾಲದಲ್ಲಿ ಈಜೆಬೆಲಳು
ಯೆಹೋವನ ಪ್ರವಾದಿಗಳನ್ನೆಲ್ಲ ಕೊಲ್ಲುತ್ತಿದ್ದಳು.
ಓಬದ್ಯನು ನೂರು ಮಂದಿ ಪ್ರವಾದಿಗಳನ್ನು ಕರೆ
ದೊಯ್ದು, ಅವರನ್ನು ಗುಹೆಗಳಲ್ಲಿ ಅಡಗಿಸಿಟ್ಟನು.
ಓಬದ್ಯನು ಐವತ್ತು ಮಂದಿ ಪ್ರವಾದಿಗಳನ್ನು ಒಂದು ಗುಹೆ
ಯಲ್ಲಿಯೂ ಉಳಿದ ಐವತ್ತು ಮಂದಿ ಪ್ರವಾದಿಗಳನ್ನು
ಮತ್ತೊಂದು ಗುಹೆಯಲ್ಲಿಯೂ ಇಟ್ಟನು. ಓಬದ್ಯನು
ಅವರಿಗೆ ಆಹಾರವನ್ನೂ ನೀರನ್ನೂ ಒದಗಿಸುತ್ತಿದ್ದನು.)
5ರಾಜನಾದ ಅಹಾಬನು ಓಬದ್ಯನಿಗೆ ‘‘ನನ್ನ ಜೊತೆಯಲ್ಲಿ
ಬಾ. ನಾವು ದೇಶದಲ್ಲಿರುವ ಪ್ರತಿಯೊಂದು ನೀರಿನ ಬುಗ್ಗೆ
ಗಳಿಗೂ ತೊರೆಗಳಿಗೂ ಹೋಗಿ ನಮ್ಮ ಕುದುರೆಗಳಿಗೂ
ಹೇಸರಕತ್ತೆಗಳಿಗೂ ಸಾಕಷ್ಟು ಹುಲ್ಲು ಸಿಕ್ಕುತ್ತದೆಯೋ
ನೋಡಿಕೊಂಡು ಬರೋಣ. ಸಿಕ್ಕುವುದಾದರೆ, ನಮ್ಮ
ಪಶುಗಳು ಸಾಯುವುದಿಲ್ಲ’’ ಎಂದು ಹೇಳಿದನು.
6ಅಂತೆಯೇ ನೀರನ್ನು ಕಂಡುಕೊಳ್ಳಲು ದೇಶದ ಒಂದು
ಕಡೆಗೆ ಅಹಾಬನು ಮತ್ತೊಂದು ಕಡೆಗೆ ಓಬದ್ಯನು
ಹೊರಟರು. ಅವರಿಬ್ಬರೂ ದೇಶವನ್ನೆಲ್ಲಾ ಸಂಚರಿಸಿ
ದರು. 7ಓಬದ್ಯನು ಸಂಚರಿಸುತ್ತಿರುವಾಗ ಎಲೀಯನನ್ನು
ಭೇಟಿಯಾದನು. ಓಬದ್ಯನು ಎಲೀಯನನ್ನು ಕಂಡ
ಕೊಡಲೇ ಅವನನ್ನು ಗುರುತಿಸಿ ಎಲೀಯನಿಗೆ ಸಾಷ್ಟಾಂಗ
ನಮಸ್ಕಾರ ಮಾಡಿ, ‘‘ನನ್ನ ಒಡೆಯನಾದ ಎಲೀಯನು
ನೀನೋ?’’ ಎಂದು ಕೇಳಿದನು.

8ಎಲೀಯನು, ‘‘ಹೌದು, ನಾನೇ. ಹೋಗಿ, ನಿನ್ನ
ಒಡೆಯನಾದ ರಾಜನಿಗೆ ನಾನಿಲ್ಲಿದ್ದೇನೆಂದು ಹೇಳು’’
ಎಂದು ಉತ್ತರಿಸಿದನು.

9ಆಗ ಓಬದ್ಯನು ‘‘ನೀನು ಎಲ್ಲಿರುವೆ ಎಂಬುದು ನನಗೆ
ತಿಳಿದಿದೆಯೆಂದು ನಾನು ರಾಜನಿಗೆ ಹೇಳಿದರೆ, ಅವನು
ನನ್ನನ್ನು ಕೊಂದುಬಿಡುತ್ತಾನೆ! ನಾನು ನಿನಗೆ ಯಾವ
ತಪ್ಪನ್ನೂ ಮಾಡಿಲ್ಲ! ನೀನೇಕೆ ನನ್ನನ್ನು ಸಾಯಿಸ
ಬೇಕೆಂದಿರುವೆ? 10ನಿನ್ನ ದೇವರಾದ ಯೆಹೋವನಾಣೆ,
ರಾಜನು ನಿನಗಾಗಿ ಎಲ್ಲಾ ಕಡೆಯೂ ಹುಡುಕುತ್ತಿದ್ದಾನೆ!
ಅವನು ನಿನ್ನನ್ನು ಕಂಡುಹಿಡಿಯಲು ಎಲ್ಲಾ ದೇಶಗಳಿಗೂ
ಜನರನ್ನು ಕಳುಹಿಸಿದ್ದಾನೆ. ಒಂದು ದೇಶದ ಅಧಿಪತಿಯು
ನಮ್ಮ ದೇಶದಲ್ಲಿ ಎಲೀಯನು ಇಲ್ಲವೆಂದು ಹೇಳಿದರೆ ಆ
ಮಾತು ಸತ್ಯವೊ ಎಂಬುದನ್ನು ತಿಳಿದುಕೊಳ್ಳುವುದಕ್ಕಾಗಿ
ಅಹಾಬನು ಆ ಅಧಿಪತಿಯಿಂದ ಪ್ರಮಾಣ ಮಾಡಿಸು
ತ್ತಾನೆ. 11ಈಗ ನೀನು ಇಲ್ಲಿರುವೆಯೆಂಬುದನ್ನು ನಾನು
ಹೋಗಿ ಅವನಿಗೆ ತಿಳಿಸುವಂತೆ, ನೀನು ಇಚ್ಛಿಸಿರುವೆ
ಯಲ್ಲವೇ? 12ನಾನು ಹೋಗಿ ರಾಜನಾದ ಅಹಾಬನಿಗೆ
ನೀನು ಇಲ್ಲಿರುವೆಯೆಂಬುದನ್ನು ತಿಳಿಸಿದರೆ, ನಂತರ
ಯೆಹೋವನು ನಿನ್ನನ್ನು ಬೇರೊಂದು ಸ್ಥಳಕ್ಕೆ ಕರೆ
ದೊಯ್ಯುವನು. ರಾಜನಾದ ಅಹಾಬನು ಇಲ್ಲಿಗೆ
ಬಂದಾಗ, ನಿನ್ನನ್ನು ಕಂಡುಹಿಡಿಯಲು ಸಮರ್ಥನಾಗುವು
ದಿಲ್ಲ. ಆಗ ಅವನು ನನ್ನನ್ನು ಕೊಂದುಬಿಡುತ್ತಾನೆ! ನನ್ನ
ಬಾಲ್ಯದಿಂದಲೂ ನಾನು ಯೆಹೋವನನ್ನೇ ಅನುಸರಿ
ಸುತ್ತಿದ್ದೇನೆ. 13ನಾನು ಏನು ಮಾಡಿದೆನೆಂಬುದು ನಿನಗೆ
ತಿಳಿಯಲಿಲ್ಲವೇ? ಯೆಹೋವನ ಪ್ರವಾದಿಗಳನ್ನು ಈಜೆಬೆ
ಲಳು ಕೊಲ್ಲುತ್ತಿದ್ದಾಗ ನೂರು ಮಂದಿ ಪ್ರವಾದಿಗಳನ್ನು
ನಾನು ಗುಹೆಗಳಲ್ಲಿ ಅಡಗಿಸಿಟ್ಟೆನು. ಐವತ್ತು ಮಂದಿ
ಪ್ರವಾದಿಗಳನ್ನು ಒಂದು ಗುಹೆಯಲ್ಲಿಯೂ ಉಳಿದ
ಐವತ್ತು ಮಂದಿಯನ್ನು ಮತ್ತೊಂದು ಗುಹೆಯಲ್ಲಿಯೂ
ನಾನು ಅಡಗಿಸಿಟ್ಟೆನು. ಅವರಿಗೆ ಆಹಾರವನ್ನೂ ನೀರನ್ನೂ
ನಾನು ತಂದುಕೊಡುತ್ತಿದ್ದೆನು. 14ಈಗ ನಿನ್ನ ಅಪೇಕ್ಷೆ
ಯಂತೆ ನಾನು ಹೋಗಿ, ನೀನು ಇಲ್ಲಿರುವೆ ಎಂಬುದನ್ನು
ರಾಜನಿಗೆ ತಿಳಿಸಿದರೆ, ರಾಜನು ನನ್ನನ್ನು ಕೊಂದು
ಹಾಕುತ್ತಾನೆ’’ ಎಂದು ಹೇಳಿದನು.

15ಎಲೀಯನು, ‘‘ನಾನು ಸೇವೆ ಮಾಡುತ್ತಿರುವ
ಸರ್ವಶಕ್ತನಾದ ಯೆಹೋವನಾಣೆ, ಈ ದಿನ ನಾನು
ರಾಜನ ಎದುರಿನಲ್ಲಿ ಹಾಜರಾಗುತ್ತೇನೆ ಎಂಬುದಾಗಿ
ಪ್ರಮಾಣ ಮಾಡುತ್ತೇನೆ’’ ಎಂದನು.

16ಓಬದ್ಯನು ರಾಜನಾದ ಅಹಾಬನ ಬಳಿಗೆ ಹೋಗಿ
ಎಲೀಯನು ಇರುವ ಸ್ಥಳವನ್ನು ತಿಳಿಸಿದನು. ರಾಜನಾದ
ಅಹಾಬನು ಎಲೀಯನನ್ನು ಭೇಟಿಮಾಡಲು ಹೋದನು.

17ಅಹಾಬನು ಎಲೀಯನನ್ನು ಕಂಡು, ‘‘ಇಸ್ರೇಲಿಗೆ
ತೊಂದರೆ ಕೊಡುವವನು ನೀನೇ ಅಲ್ಲವೇ?’’ಎಂದನು.

18ಎಲೀಯನು, ‘‘ಇಸ್ರೇಲಿನ ತೊಂದರೆಗೆ ನಾನು
ಕಾರಣನಲ್ಲ. ನೀನು ಮತ್ತು ನಿನ್ನ ತಂದೆಯ ಕುಟುಂಬವು
ಈ ತೊಂದರೆಗಳಿಗೆಲ್ಲ ಕಾರಣ. ಯೆಹೋವನ ಆಜ್ಞೆಗಳಿಗೆ
ವಿಧೇಯನಾಗದೆ ಸುಳ್ಳುದೇವರುಗಳನ್ನು ಅನುಸರಿಸ

ತೊಡಗಿದ್ದರಿಂದ ಆ ತೊಂದರೆಗಳಿಗೆಲ್ಲಾ ನೀನೇ ಕಾರಣ
ನಾಗಿರುವೆ. [19]ಈಗ ಕರ್ಮೆಲ್ ಬೆಟ್ಟದ ಮೇಲೆ ನನ್ನನ್ನು
ಭೇಟಿಮಾಡಲು ಎಲ್ಲಾ ಇಸ್ರೇಲರಿಗೆ ತಿಳಿಸು. ಬಾಳನ
ನಾನೂರೈವತ್ತು ಮಂದಿ ಪ್ರವಾದಿಗಳನ್ನು ಆ ಸ್ಥಳಕ್ಕೆ ಕರೆದು
ಕೊಂಡು ಬಾ. ಸುಳ್ಳುದೇವತೆಯಾದ ಅಶೇರಳ ನಾನೂರು
ಮಂದಿ ಪ್ರವಾದಿಗಳನ್ನೂ ಕರೆದುಕೊಂಡು ಬಾ. ಆ
ಪ್ರವಾದಿಗಳನ್ನು ರಾಣಿಯಾದ ಈಜೆಬೆಲಳು ಪೋಷಣೆ
ಮಾಡುತ್ತಿದ್ದಾಳೆ'' ಎಂದು ಹೇಳಿದನು.

[20]ಇಸ್ರೇಲರೆಲ್ಲರನ್ನು ಮತ್ತು ಆ ಪ್ರವಾದಿಗಳನ್ನು
ಕರ್ಮೆಲ್ ಬೆಟ್ಟಕ್ಕೆ ಅಹಾಬನು ಕರೆಸಿದನು. [21]ಜನರೆಲ್ಲರ
ಹತ್ತಿರಕ್ಕೆ ಎಲೀಯನು ಬಂದು ಅವರಿಗೆ, ''ನೀವು
ಯಾರನ್ನು ಹಿಂಬಾಲಿಸಬೇಕೆಂಬುದನ್ನು ಯಾವಾಗ
ತೀರ್ಮಾನಿಸುತ್ತೀರಿ? ಯೆಹೋವನು ನಿಜವಾದ ದೇವ
ರಾಗಿದ್ದರೆ, ನೀವು ಆತನನ್ನು ಹಿಂಬಾಲಿಸಬೇಕು; ಬಾಳನೇ
ನಿಜವಾದ ದೇವರಾಗಿದ್ದರೆ,ನೀವು ಅವನನ್ನೇ ಹಿಂಬಾಲಿಸ
ಬೇಕು'' ಎಂದನು. ಜನರು ಏನನ್ನೂ ಹೇಳಲಿಲ್ಲ. [22]ಎಲೀ
ಯನು, ''ಯೆಹೋವನ ಪ್ರವಾದಿಯಾಗಿ ನಾನೊಬ್ಬನು
ಮಾತ್ರ ಇಲ್ಲಿದ್ದೇನೆ. ಆದರೆ ಇಲ್ಲಿ ನಾನೂರೈವತ್ತು ಮಂದಿ
ಬಾಳನ ಪ್ರವಾದಿಗಳಿದ್ದಾರೆ. [23]ಎರಡು ಹೋರಿಗಳನ್ನು
ತನ್ನಿ. ಬಾಳನ ಪ್ರವಾದಿಗಳು ಒಂದು ಹೋರಿಯನ್ನು
ತೆಗೆದುಕೊಳ್ಳಲಿ. ಅವರು ಅದನ್ನು ಕೊಂದು, ತುಂಡು
ತುಂಡಾಗಿ ಕತ್ತರಿಸಲಿ. ನಂತರ ಅವರು ಆ ಮಾಂಸವನ್ನು
ಸೌದೆಯ ಮೇಲಿಡಲಿ. ಆದರೆ ಬೆಂಕಿಯನ್ನು ಹೊತ್ತಿಸು
ವುದು ಬೇಡ. ಆಗ ನಾನು ಮತ್ತೊಂದು ಹೋರಿಯನ್ನು
ಅವರಂತೆಯೇ ಕತ್ತರಿಸುವೆನು. ನಾನೂ ಬೆಂಕಿಯನ್ನು
ಹೊತ್ತಿಸುವುದಿಲ್ಲ. [24]ಬಾಳನ ಪ್ರವಾದಿಗಳಾದ ನೀವು
ನಿಮ್ಮ ದೇವರನ್ನು ಪ್ರಾರ್ಥಿಸಿ. ನಾನು ಯೆಹೋವನನ್ನು
ಪ್ರಾರ್ಥಿಸುತ್ತೇನೆ. ನಮ್ಮಲ್ಲಿ ಯಾರ ಪ್ರಾರ್ಥನೆಗೆ
ಉತ್ತರವಾಗಿ ದೇವರು ಸೌದೆಯನ್ನು ಉರಿಯುವಂತೆ
ಮಾಡುತ್ತಾನೋ ಆತನೇ ನಿಜವಾದ ದೇವರು'' ಎಂದು
ಹೇಳಿದನು.

ಜನರೆಲ್ಲರೂ ಇದು ಒಳ್ಳೆಯ ಆಲೋಚನೆಯೆಂದು
ಒಪ್ಪಿಕೊಂಡರು.

[25]ನಂತರ ಎಲೀಯನು ಬಾಳನ ಪ್ರವಾದಿಗಳಿಗೆ,
ನಿಮ್ಮಲ್ಲಿ ಬಹು ಜನರು ಇರುವುದರಿಂದ ಮೊದಲು ನೀವೇ
ಹೋಗಿ ನಿಮ್ಮ ಹೋರಿಯನ್ನು ಆರಿಸಿಕೊಂಡು ಅದನ್ನು
ಸಿದ್ಧಪಡಿಸಿ. ನಿಮ್ಮ ದೇವರಿಗೆ ಪ್ರಾರ್ಥಿಸಿ. ಆದರೆ ನೀವು
ಬೆಂಕಿಯನ್ನು ಹೊತ್ತಿಸಬೇಡಿ'' ಎಂದು ಹೇಳಿದನು.

[26]ಪ್ರವಾದಿಗಳು ತಾವು ತಂದಿದ್ದ ಹೋರಿಯನ್ನು ತೆಗೆದು
ಕೊಂಡು ಸಿದ್ಧಪಡಿಸಿದರು. ಅವರು ಬಾಳನನ್ನು ಮಧ್ಯಾಹ್ನ
ದವರೆಗೆ ಪ್ರಾರ್ಥಿಸಿದರು. ''ಬಾಳನೇ, ದಯವಿಟ್ಟು
ನಮಗೆ ಉತ್ತರ ನೀಡು!'' ಎಂದು ಅವರು ಪ್ರಾರ್ಥಿಸಿ
ದರು. ಆದರೆ ಯಾವ ಶಬ್ದವೂ ಆಗಲಿಲ್ಲ: ಯಾರೊ
ಬ್ಬರೂ ಉತ್ತರಿಸಲಿಲ್ಲ; ಪ್ರವಾದಿಗಳು ತಾವು ನಿರ್ಮಿಸಿದ್ದ
ಯಜ್ಞವೇದಿಕೆಯ ಸುತ್ತಲೂ ನರ್ತಿಸಿದರು. ಆದರೆ
ಬೆಂಕಿಯು ಹೊತ್ತಿಕೊಳ್ಳಲೇ ಇಲ್ಲ. [27]ಮಧ್ಯಾಹ್ನವಾದಾಗ
ಎಲೀಯನು ಅವರನ್ನು ಅಪಹಾಸ್ಯ ಮಾಡಲಾರಂಭಿ
ಸಿದನು. ಎಲೀಯನು, ''ಬಾಳನು ನಿಜವಾದ ದೇವರಾ
ಗಿದ್ದರೆ, ನೀವು ಮತ್ತಷ್ಟು ಗಟ್ಟಿಯಾಗಿ ಪ್ರಾರ್ಥಿಸಿ! ಬಹುಶಃ
ಅವನು ಯೋಚನಾನಿರತನಾಗಿರಬಹುದು! ಅಥವಾ
ಕಾರ್ಯನಿರತನಾಗಿರಬಹುದು! ಅಥವಾ ಸಂಚಾರನಿರತ
ನಾಗಿರಬಹುದು! ಅಥವಾ ನಿದ್ರಾ ಮಗ್ನನಾಗಿರಬಹುದು!
ನೀವು ಮತ್ತಷ್ಟು ಗಟ್ಟಿಯಾಗಿ ಪ್ರಾರ್ಥಿಸಿ, ಅವನನ್ನು ಎಚ್ಚರ
ಗೊಳಿಸಿ!'' ಎಂದು ಹೇಳಿದನು. [28]ಪ್ರವಾದಿಗಳು ಮತ್ತಷ್ಟು
ಗಟ್ಟಿಯಾಗಿ ಪ್ರಾರ್ಥಿಸಿದರು. ಅವರು ಖಡ್ಗ ಮತ್ತು ಬರ್ಜಿ
ಗಳಿಂದ ತಮ್ಮನ್ನು ತಾವೇ ತಿವಿದುಕೊಂಡರು. (ಅವರು
ಆರಾಧಿಸುವ ರೀತಿಯೇ ಇದು.) ರಕ್ತವು ತಮ್ಮ ದೇಹದ
ಮೇಲೆ ಚಿಮ್ಮುವತನಕ ಅವರು ತಮ್ಮನ್ನು ತಾವು ತಿವಿದು
ಕೊಂಡರು. [29]ಮಧ್ಯಾಹ್ನದ ಸಮಯವು ಮೀರುತ್ತಾ
ಬಂದರೂ ಬೆಂಕಿಯು ಹೊತ್ತಿಕೊಳ್ಳಲೇ ಇಲ್ಲ. ಸಾಯಂ
ಕಾಲದ ಯಜ್ಞಗಳನ್ನು ಅರ್ಪಿಸುವ ಸಮಯ ಬರುವ ತನಕ
ಪ್ರವಾದಿಗಳು ಗಟ್ಟಿಯಾಗಿ ಕೂಗುತ್ತಲೇ ಇದ್ದರು.
ಆದರೂ ಬಾಳನಿಂದ ಉತ್ತರವೇ ಬರಲಿಲ್ಲ. ಯಾವ
ಶಬ್ದವೂ ಆಗಲಿಲ್ಲ; ಅವರ ಕೂಗಾಟವನ್ನು ಯಾರೂ
ಲಕ್ಷಿಸಲಿಲ್ಲ.

[30]ಆಗ ಎಲೀಯನು ಜನರೆಲ್ಲರಿಗೂ, ''ಈಗ ನನ್ನ ಬಳಿಗೆ
ಬನ್ನಿ'' ಎಂದನು. ಅವನ ಸುತ್ತಲೂ ಜನರೆಲ್ಲರೂ ಒಟ್ಟು
ಗೂಡಿದರು. ಯೆಹೋವನ ಯಜ್ಞವೇದಿಕೆಯು ಒಡೆದು
ಹೋಗಿತ್ತು. ಎಲೀಯನು ಅದನ್ನು ಸರಿಪಡಿಸಿದನು.
[31]ಎಲೀಯನು ಇಸ್ರೇಲಿನ ಪ್ರತಿಯೊಂದು ಕುಲಕ್ಕೂ
ಒಂದೊಂದು ಕಲ್ಲಿನಂತೆ ಹನ್ನೆರಡು ಕಲ್ಲುಗಳನ್ನು ತೆಗೆದು
ಕೊಂಡನು. ಯೆಹೋವನಿಂದ ಇಸ್ರೇಲನೆಂದು ಕರೆಸಿ
ಕೊಂಡ ಯಾಕೋಬನ ಹನ್ನೆರಡು ಗಂಡುಮಕ್ಕಳ
ಹೆಸರನ್ನೇ ಈ ಕುಲಗಳಿಗೆ ಕೊಡಲಾಗಿತ್ತು. [32]ಎಲೀಯನು
ಯೆಹೋವನ ಗೌರವಾರ್ಥವಾಗಿ ಯಜ್ಞವೇದಿಕೆಯನ್ನು
ಈ ಕಲ್ಲುಗಳಿಂದ ಸರಿಪಡಿಸಿದನು. ಎಲೀಯನು ಯಜ್ಞ
ವೇದಿಕೆಯ ಸುತ್ತಲೂ ಹಳ್ಳವನ್ನು ತೋಡಿದನು. ಅದು
ಹದಿನೈದು ಲೀಟರ್ ನೀರು ತುಂಬುವಷ್ಟು ಅಗಲವಾಗಿತ್ತು
ಮತ್ತು ಆಳವಾಗಿತ್ತು. [33]ನಂತರ ಎಲೀಯನು ಸೌದೆ
ಯನ್ನು ಯಜ್ಞವೇದಿಕೆಯ ಮೇಲೆ ಇಟ್ಟನು. ಅವನು
ಹೋರಿಯನ್ನು ತುಂಡು ತುಂಡಾಗಿ ಕತ್ತರಿಸಿದನು. ಅವನು
ಆ ತುಂಡುಗಳನ್ನು ಸೌದೆಯ ಮೇಲಿಟ್ಟನು. [34]ಎಲೀ
ಯನು, ''ನಾಲ್ಕು ಕೊಡಗಳಲ್ಲಿ ನೀರನ್ನು ತುಂಬಿಸಿ. ಆ
ಮಾಂಸದ ತುಂಡುಗಳ ಮೇಲೆ ಮತ್ತು ಸೌದೆಯ ಮೇಲೆ

ಆ ನೀರನ್ನು ಸುರಿಯಿರಿ'' ಎಂದು ಹೇಳಿದನು. ಎಲೀ
ಯನು, ''ಮತ್ತೆ ಅದೇ ರೀತಿ ಮಾಡಿ'' ಎಂದನು. ಅವನು,
''ಮೂರನೆಯ ಸಲ ಅದೇ ರೀತಿ ಮಾಡಿ'' ಎಂದನು.
35ಯಜ್ಞವೇದಿಕೆಯಿಂದ ಹರಿದ ನೀರೆಲ್ಲ ಹಳ್ಳವನ್ನು
ತುಂಬಿಕೊಂಡಿತ್ತು. 36ಅದು ಮಧ್ಯಾಹ್ನದ ಯಜ್ಞಗಳನ್ನು
ಅರ್ಪಿಸುವ ಸಮಯ. ಪ್ರವಾದಿಯಾದ ಎಲೀಯನು
ಯಜ್ಞವೇದಿಕೆಯ ಹತ್ತಿರಕ್ಕೆ ಹೋಗಿ, ''ಅಬ್ರಹಾಮನ,
ಇಸಾಕನ ಮತ್ತು ಯಾಕೋಬನ ದೇವರಾದ
ಯೆಹೋವನೇ, ನೀನು ಇಸ್ರೇಲಿನಲ್ಲಿರುವ ದೇವ
ರೆಂಬುದನ್ನು ರುಜುವಾತುಪಡಿಸಲು ನಾನೀಗ ನಿನ್ನನ್ನು
ಪ್ರಾರ್ಥಿಸುತ್ತಿದ್ದೇನೆ. ನಾನು ನಿನ್ನ ಸೇವಕನೆಂಬುದನ್ನೂ
ನೀನು ನಿರೂಪಿಸು. ಈ ಕಾರ್ಯಗಳನ್ನೆಲ್ಲಾ ನಾನು
ಮಾಡುವಂತೆ ನೀನು ಆಜ್ಞಾಪಿಸಿದೆ ಎನ್ನುವುದನ್ನೂ ಈ
ಜನರಿಗೆ ತೋರಿಸು. 37ಯೆಹೋವನೇ, ನನ್ನ ಪ್ರಾರ್ಥನೆಗೆ
ಕಿವಿಗೊಡು. ಯೆಹೋವನೇ ನೀನು ದೇವರೆಂಬುದನ್ನು
ಈ ಜನರಿಗೆಲ್ಲ ತೋರಿಸು. ಈ ಜನರನ್ನೆಲ್ಲ ಮತ್ತೆ ನೀನು
ನಿನ್ನ ಬಳಿಗೆ ತರುತ್ತಿರುವೆ ಎಂಬುದನ್ನೂ ಈ ಜನರು
ತಿಳಿದುಕೊಳ್ಳಲಿ'' ಎಂದು ಪ್ರಾರ್ಥಿಸಿದನು.

38ಕೂಡಲೇ ಯೆಹೋವನ ಕಡೆಯಿಂದ ಬೆಂಕಿಬಿದ್ದು
ಯಜ್ಞಗಳನ್ನು, ಸೌದೆಯನ್ನು, ಕಲ್ಲುಗಳನ್ನು ಮತ್ತು
ಯಜ್ಞವೇದಿಕೆಯ ಸುತ್ತಲಿನ ಮಣ್ಣನ್ನೆಲ್ಲ ದಹಿಸಿತು. ಆ
ಹಳ್ಳದಲ್ಲಿದ್ದ ನೀರನ್ನೆಲ್ಲ ಬೆಂಕಿಯು ದಹಿಸಿ ಒಣಗಿಸಿತು.
39ಈ ದೃಶ್ಯವನ್ನು ಜನರೆಲ್ಲರೂ ನೋಡಿದರು. ಜನರು
ನೆಲಕ್ಕೆ ಬಾಗಿ ನಮಸ್ಕರಿಸುತ್ತಾ ''ಯೆಹೋವನೇ ದೇವರು!
ಯೆಹೋವನೇ ದೇವರು!'' ಎಂದು ಕೂಗಿದರು.

40ಆಗ ಎಲೀಯನು, ''ಬಾಳನ ಪ್ರವಾದಿಗಳನ್ನು
ಹಿಡಿದು ತನ್ನಿ! ಅವರಲ್ಲಿ ಒಬ್ಬರಾದರೂ ತಪ್ಪಿಸಿಕೊಳ್ಳದಂತೆ
ನೋಡಿಕೊಳ್ಳಿ!'' ಎಂದು ಹೇಳಿದನು. ಪ್ರವಾದಿಗಳನ್ನೆಲ್ಲ
ಜನರು ಹಿಡಿದುಕೊಂಡರು. ಎಲೀಯನು ಅವರನ್ನೆಲ್ಲಾ
ಕೀಷೋನ್ ಬುಗ್ಗೆಗೆ ಎಳೆದುಕೊಂಡು ಹೋಗಿ ಕೊಂದು
ಹಾಕಿದನು.

### ಮಳೆಯು ಮತ್ತೆ ಸುರಿಯಿತು

41ನಂತರ ಎಲೀಯನು ರಾಜನಾದ ಅಹಾಬನಿಗೆ,
''ಈಗ ಹೋಗಿ, ಅನ್ನಪಾನಗಳನ್ನು ತೆಗೆದುಕೊ. ಬಿರು
ಸಾದ ಮಳೆಯು ಸುರಿಯುವುದು'' ಎಂದು ಹೇಳಿದನು.
42ರಾಜನಾದ ಅಹಾಬನು ಅನ್ನಪಾನಗಳನ್ನು ತೆಗೆದು
ಕೊಳ್ಳಲು ಹೋದನು. ಅದೇ ಸಮಯದಲ್ಲಿ ಎಲೀಯನು
ಕರ್ಮೆಲ್ ಬೆಟ್ಟದ ತುದಿಗೆ ಹತ್ತಿದನು. ಎಲೀಯನು
ಬೆಟ್ಟದ ತುದಿಯಲ್ಲಿ ಸಾಷ್ಟಾಂಗವೆರಗಿದನು. ಅವನು ತನ್ನ
ಮೊಣಕಾಲುಗಳ ನಡುವೆ ತಲೆಯನ್ನು ಇಟ್ಟುಕೊಂಡನು.
43ಎಲೀಯನು ತನ್ನ ಸೇವಕನಿಗೆ, ''ಸಮುದ್ರದ ಕಡೆಗೆ
ನೋಡು'' ಎಂದು ಹೇಳಿದನು. ಸಮುದ್ರವು ಕಾಣುವ
ಸ್ಥಳಕ್ಕೆ ಆ ಸೇವಕನು ಹೋದನು. ನಂತರ ಸೇವಕನು
ಹಿಂದಿರುಗಿ ಬಂದು, ''ನನಗೆ ಏನೂ ಕಾಣುತ್ತಿಲ್ಲ''
ಎಂದನು. ಎಲೀಯನು ಆ ಸೇವಕನಿಗೆ, ''ಹೋಗಿ ಮತ್ತೆ
ನೋಡು'' ಎಂದನು. ಹೀಗೆ ಆ ಸೇವಕನು ಏಳು ಸಲ
ಹೋದನು. 44ಏಳನೆಯ ಸಲ, ಸೇವಕನು ಹಿಂದಿರುಗಿ
ಬಂದು, 'ಒಬ್ಬ ಮನುಷ್ಯನ ಮುಷ್ಟಿ ಗಾತ್ರದ ಚಿಕ್ಕ ಮೋಡ
ವನ್ನು ನಾನು ನೋಡಿದನು. ಆ ಮೋಡವು ಸಮುದ್ರದಿಂದ
ಬರುತ್ತಿದೆ'' ಎಂದನು.

ಎಲೀಯನು ಸೇವಕನಿಗೆ,''ರಾಜನಾದ ಅಹಾಬನ
ಬಳಿಗೆ ಹೋಗಿ, ತನ್ನ ರಥವನ್ನು ಸಿದ್ಧಗೊಳಿಸಿ ಈಗಲೇ
ಮನೆಗೆ ಹೋಗುವಂತೆ ಅವನಿಗೆ ಹೇಳು, ಅವನೀಗ ಬಿಟ್ಟು
ಹೋಗದಿದ್ದರೆ, ಮಳೆಯು ಅವನನ್ನು ತಡೆಯುತ್ತದೆ ''
ಎಂದು ಹೇಳಿದನು.

45ಸ್ವಲ್ಪ ಹೊತ್ತಿನಲ್ಲಿಯೇ, ಆಕಾಶವು ಕಪ್ಪಾದ ಮೋಡಗ
ಳಿಂದ ಕವಿದುಕೊಂಡಿತು. ಗಾಳಿಯು ಬೀಸಲಾರಂಭಿಸಿತು
ಮತ್ತು ಬಿರುಸಾದ ಮಳೆಯು ಸುರಿಯಲಾರಂಭಿಸಿತು.
ಅಹಾಬನು ತನ್ನ ರಥವನ್ನೇರಿ, ಇಜ್ರೇಲಿಗೆ ಪ್ರಯಾಣ
ಮಾಡಲಾರಂಭಿಸಿದನು. 46ಯೆಹೋವನ ಶಕ್ತಿಯು
ಎಲೀಯನ ಮೇಲೆ ಬಂದಿತು. ಎಲೀಯನು ಓಡುವುದ
ಕ್ಕಾಗಿ ತನ್ನ ಬಟ್ಟೆಗಳನ್ನು ತನ್ನ ಸುತ್ತಲೂ ಬಿಗಿದುಕೊಂಡನು.
ನಂತರ ಎಲೀಯನು ರಾಜನಾದ ಆಹಾಬನಿಗಿಂತ ಮುಂಚೆ
ಇಜ್ರೇಲಿನ ದಾರಿಯುದ್ದಕ್ಕೂ ಓಡುತ್ತಲೇ ಹೋದನು.

### ಸಿನಾಯ್ ಬೆಟ್ಟದಲ್ಲಿ ಎಲೀಯನು

19 ರಾಜನಾದ ಅಹಾಬನು ಈಜೆಬೆಲಳಿಗೆ
ಎಲೀಯನು ಮಾಡಿದ ಎಲ್ಲಾ ಕಾರ್ಯಗಳನ್ನು
ಹೇಳಿದನು. ಎಲೀಯನು (ಬಾಳನ) ಪ್ರವಾದಿಗಳನ್ನೆಲ್ಲ
ಖಡ್ಗದಿಂದ ಹೇಗೆ ಕೊಂದನೆಂಬುದನ್ನೂ ಅಹಾಬನು
ಅವಳಿಗೆ ಹೇಳಿದನು. 2ಆದುದರಿಂದ ಈಜೆಬೆಲಳು
ಎಲೀಯನ ಬಳಿಗೆ ಒಬ್ಬ ಸಂದೇಶಕನನ್ನು ಕಳುಹಿಸಿದಳು.
ಈಜೆಬೆಲಳು, ''ನೀನು ಆ ಪ್ರವಾದಿಗಳನ್ನು ಕೊಂದು ಹಾಕಿ
ದಂತೆ ನಾಳೆಯ ದಿನ ನಾನು ಇದೇ ಸಮಯಕ್ಕೆ ಮುಂಚೆ,
ನಿನ್ನನ್ನು ಕೊಂದುಹಾಕುವೆನೆಂದು ಪ್ರಮಾಣ ಮಾಡು
ತ್ತೇನೆ. ನಾನು ಈ ಕಾರ್ಯದಲ್ಲಿ ವಿಜಯಿಯಾಗದಿದ್ದಲ್ಲಿ,
ದೇವರುಗಳು ನನ್ನನ್ನು ಕೊಲ್ಲಲಿ'' ಎಂದು ಹೇಳಿದಳು.

3ಎಲೀಯನು ಇದನ್ನು ಕೇಳಿ ಭಯಗೊಂಡನು.
ಅವನು ತನ್ನ ಜೀವರಕ್ಷಣೆಗಾಗಿ ಓಡಿಹೋದನು. ಅವನು
ತನ್ನ ಸೇವಕನನ್ನೂ ತನ್ನ ಸಂಗಡ ಕರೆದೊಯ್ದನು. ಅವರು
ಯೆಹೂದದ ಬೇರ್ಷೆಬಕ್ಕೆ ಹೋದರು. ಎಲೀಯನು
ಬೇರ್ಷೆಬದಲ್ಲಿ ತನ್ನ ಸೇವಕನನ್ನು ಬಿಟ್ಟನು. 4ನಂತರ
ಎಲೀಯನು ಮರುಳುಗಾಡಿನಲ್ಲಿ ದಿನವೆಲ್ಲ ನಡೆದನು.

ಎಲೀಯನು ಒಂದು ಪೊದೆಯ ಕೆಳಗೆ ಕುಳಿತು
ಕೊಂಡನು. ಅವನು ಸಾಯಲು ಇಚ್ಛಿಸಿ, ‘‘ಯೆಹೋವನೇ,
ನನಗೆ ಜೀವನ ಸಾಕಾಗಿದೆ! ಸಾಯಲು ನನಗೆ ಅವಕಾಶ
ಮಾಡು. ನಾನು ನನ್ನ ಪೂರ್ವಿಕರಿಗಿಂತಲೂ ಉತ್ತಮನೇ
ನಲ್ಲ’’ ಎಂದು ಹೇಳಿದನು.

5ನಂತರ ಎಲೀಯನು ಪೊದೆಯ ಕೆಳಗೆ ಮಲಗಿ
ನಿದ್ದೆಹೋದನು. ದೂತನೊಬ್ಬನು ಎಲೀಯನ ಹತ್ತಿರಕ್ಕೆ
ಬಂದು ಅವನನ್ನು ಸ್ಪರ್ಶಿಸಿ, ‘‘ಎದ್ದೇಳು! ಊಟಮಾಡು!’’
ಎಂದನು. 6ಇದ್ದಲಿನ ಮೇಲೆ ಸುಟ್ಟ ಒಂದು ರೊಟ್ಟಿಯೂ
ಒಂದು ತಂಬಿಗೆ ನೀರೂ ಅವನ ತಲೆಯ ಹತ್ತಿರದಲ್ಲಿ
ಇದ್ದುದನ್ನು ಎಲೀಯನು ನೋಡಿದನು. ಎಲೀಯನು
ರೊಟ್ಟಿಯನ್ನು ತಿಂದು ನೀರನ್ನು ಕುಡಿದನು. ನಂತರ
ಅವನು ನಿದ್ದೆ ಮಾಡಿದನು.

7ತರುವಾಯ ಯೆಹೋವನ ದೂತನು ಅವನ ಬಳಿಗೆ
ಮತ್ತೆ ಬಂದನು. ದೂತನು, ‘‘ಎದ್ದೇಳು! ಊಟಮಾಡು!
ನೀನು ಊಟ ಮಾಡದಿದ್ದರೆ, ಬಹುದೂರ ನೀನು
ಪ್ರಯಾಣ ಮಾಡಬೇಕಾಗಿರುವುದರಿಂದ ನಿನ್ನಲ್ಲಿ ಸಾಕಷ್ಟು
ಶಕ್ತಿಯಿರುವುದಿಲ್ಲ’’ ಎಂದು ಹೇಳಿದನು. 8ಎಲೀಯನು
ಎದ್ದು ಊಟಮಾಡಿ ನೀರನ್ನು ಕುಡಿದನು. ಎಲೀಯನು
ನಲವತ್ತು ಹಗಲು ಮತ್ತು ರಾತ್ರಿ ಪ್ರಯಾಣ ಮಾಡಲು
ಸಾಕಾಗುವಷ್ಟು ಶಕ್ತಿಯನ್ನು ಆ ಆಹಾರವು ನೀಡಿತು.
ಅವನು ದೇವರ ಬೆಟ್ಟವಾದ ಹೋರೇಬ್‌ಗೆ ಹೋದನು.
9ಎಲೀಯನು ಅಲ್ಲಿನ ಒಂದು ಗುಹೆಗೆ ಹೋಗಿ
ರಾತ್ರಿಯೆಲ್ಲಾ ಅಲ್ಲಿ ಕಳೆದನು.

ಆಗ ಯೆಹೋವನು ಎಲೀಯನೊಂದಿಗೆ ಮಾತನಾಡಿ,
‘‘ಎಲೀಯನೇ, ನೀನು ಇಲ್ಲಿರುವುದೇಕೆ?’’ ಎಂದು
ಕೇಳಿದನು.

10ಎಲೀಯನು, ‘‘ಸರ್ವಶಕ್ತನಾದ ಯೆಹೋವ
ದೇವರೇ, ನಾನು ಯಾವಾಗಲೂ ನಿನ್ನ ಸೇವೆಯನ್ನು
ಮಾಡಿದೆನು. ನಾನು ನನ್ನಿಂದ ಸಾಧ್ಯವಾದಷ್ಟು ಉತ್ತಮ
ವಾಗಿ ನಿನ್ನ ಸೇವೆಯನ್ನು ಮಾಡಿದೆನು. ಆದರೆ ಇಸ್ರೇಲಿನ
ಜನರು ನಿನ್ನೊಂದಿಗೆ ತಾವು ಮಾಡಿಕೊಂಡ ಒಪ್ಪಂದವನ್ನು
ಉಲ್ಲಂಘಿಸಿದರು. ಅವರು ನಿನ್ನ ಯಜ್ಞವೇದಿಕೆಗಳನ್ನು
ನಾಶಪಡಿಸಿದರು. ಅವರು ನಿನ್ನ ಪ್ರವಾದಿಗಳನ್ನು
ಕೊಂದರು. ಇನ್ನೂ ಜೀವಂತವಾಗಿರುವ ಪ್ರವಾದಿಯು
ನಾನೊಬ್ಬನು ಮಾತ್ರ. ಅವರು ಈಗ ನನ್ನನ್ನೂ ಕೊಲ್ಲಲು
ಪ್ರಯತ್ನಿಸುತ್ತಿದ್ದಾರೆ!’’ ಎಂದು ಹೇಳಿದನು.

11ಆಗ ಯೆಹೋವನು ಎಲೀಯನಿಗೆ, ‘‘ಹೋಗು, ನನ್ನ
ಎದುರಿಗೆ ಬೆಟ್ಟದ ಮೇಲೆ ನಿಲ್ಲು. ನಾನು ನಿನ್ನ ಬಳಿಯಲ್ಲಿ
ಹಾದುಹೋಗುತ್ತೇನೆ’’ ಎಂದು ಹೇಳಿದನು. ಆಗ ಬಿರು
ಗಾಳಿಯು ಬೀಸಿತು. ಆ ಬಿರುಗಾಳಿಯು ಬೆಟ್ಟಗಳನ್ನು
ಸೀಳಿ ಹಾಕಿತು; ಅದು ದೊಡ್ಡ ಬಂಡೆಗಳನ್ನು ಯೆಹೋವನ
ಎದುರಿನಲ್ಲಿ ಒಡೆದುಹಾಕಿತು. ಆದರೆ ಆ ಗಾಳಿಯೇ
ಯೆಹೋವನಲ್ಲ! ಆ ಬಿರುಗಾಳಿಯ ನಂತರ ಅಲ್ಲಿ ಒಂದು
ಭೂಕಂಪವುಂಟಾಯಿತು. ಆದರೆ ಆ ಭೂಕಂಪವು
ಯೆಹೋವನಲ್ಲ. 12ಭೂಕಂಪದ ನಂತರ ಅಲ್ಲಿ ಬೆಂಕಿ
ಉಂಟಾಯಿತು. ಆದರೆ ಆ ಬೆಂಕಿಯೂ ಯೆಹೋವನಲ್ಲ.
ಆ ಬೆಂಕಿಯ ನಂತರ ಸದ್ದಿಲ್ಲದ ಮೃದುವಾದ ಧ್ವನಿ
ಉಂಟಾಯಿತು. 13ಎಲೀಯನಿಗೆ ಆ ಧ್ವನಿಯು ಕೇಳಿಸಿ
ದಾಗ, ಅವನು ತನ್ನ ಮೇಲಂಗಿಯಿಂದ ಮುಖವನ್ನು
ಮುಚ್ಚಿಕೊಂಡನು. ನಂತರ ಅವನು ಗುಹೆಯ ಹತ್ತಿರಕ್ಕೆ
ಹೋಗಿ, ಅದರ ದ್ವಾರದಲ್ಲಿ ನಿಂತುಕೊಂಡನು. ಆಗ ಆ
ಧ್ವನಿಯು, ‘‘ಎಲೀಯನೇ, ನೀನು ಏಕೆ ಇಲ್ಲಿರುವೆ?’’
ಎಂದು ಅವನನ್ನು ಕೇಳಿತು.

14ಎಲೀಯನು, ‘‘ಸರ್ವಶಕ್ತನಾದ ಯೆಹೋವ
ದೇವರೇ, ನನ್ನಿಂದ ಸಾಧ್ಯವಾದಷ್ಟು ಉತ್ತಮವಾಗಿ ನಿನ್ನ
ಸೇವೆಯನ್ನು ನಾನು ಯಾವಾಗಲೂ ಮಾಡಿದೆನು. ಆದರೆ
ಇಸ್ರೇಲಿನ ಜನರು ನಿನ್ನೊಂದಿಗೆ ತಾವು ಮಾಡಿಕೊಂಡ
ಒಡಂಬಡಿಕೆಯನ್ನು ಉಲ್ಲಂಘಿಸಿದರು. ಅವರು ನಿನ್ನ
ಯಜ್ಞವೇದಿಕೆಯನ್ನು ನಾಶಪಡಿಸಿದರು, ಅವರು ನಿನ್ನ
ಪ್ರವಾದಿಗಳನ್ನು ಕೊಂದುಹಾಕಿದರು. ಇನ್ನೂ ಜೀವಂತ
ವಾಗಿರುವ ಪ್ರವಾದಿಯು ನಾನೊಬ್ಬನು ಮಾತ್ರ. ಅವರು
ಈಗ ನನ್ನನ್ನು ಕೊಲ್ಲಲ್ಲು ಪ್ರಯತ್ನಿಸುತ್ತಿದ್ದಾರೆ’’ ಎಂದು
ಹೇಳಿದನು.

15ಯೆಹೋವನು ‘‘ನೀನು ಬಂದ ದಾರಿಯಿಂದ
ಹಿಂತಿರುಗಿ ದಮಸ್ಕದ ಅರಣ್ಯಕ್ಕೆ ಹೋಗು. ಅಲ್ಲಿಂದ
ದಮಸ್ಕಕ್ಕೆ ಹೋಗಿ, ಹಜಾಯೇಲನನ್ನು ಆರಾಮ್ಯರ ರಾಜ
ನನ್ನಾಗಿ ಅಭಿಷೇಕಿಸು.

16ನಂತರ ನಿಂಷಿಯ ಮಗನಾದ ಯೇಹುವನ್ನು
ಇಸ್ರೇಲಿನ ರಾಜನನ್ನಾಗಿ ಅಭಿಷೇಕಿಸು. ಅಬೇಲ್
ಮೆಹೋಲದ ಶಾಫಾಟನ ಮಗನಾದ ಎಲೀಷನನ್ನು ನಿನ್ನ
ಜಾಗದಲ್ಲಿ ಪ್ರವಾದಿಯನ್ನಾಗಿ ಅಭಿಷೇಕಿಸು.

17ಹಜಾಯೇಲನು ಕೆಟ್ಟವರಾದ ಅನೇಕ ಜನರನ್ನು
ಕೊಲ್ಲುತ್ತಾನೆ. ಹಜಾಯೇಲನ ಖಡ್ಗದಿಂದ ತಪ್ಪಿಸಿ
ಕೊಂಡವರನ್ನು ಯೇಹುವು ಕೊಲ್ಲುತ್ತಾನೆ. ಯೇಹುವಿ
ನಿಂದ ತಪ್ಪಿಸಿಕೊಂಡ ಆ ಕೆಟ್ಟ ಜನರನ್ನೆಲ್ಲ ಎಲೀಷನು
ಕೊಲ್ಲುತ್ತಾನೆ.

18ಎಲೀಯನೇ, ಇಸ್ರೇಲಿನಲ್ಲಿ ನಂಬಿಗಸ್ಥನಾದ
ವ್ಯಕ್ತಿಯು ನೀನೊಬ್ಬನು ಮಾತ್ರ ಅಲ್ಲ. ಆ ದುಷ್ಟಜನರು
ಅನೇಕ ಜನರನ್ನು ಕೊಲ್ಲುತ್ತಾರೆ. ಆದರೂ, ಅದಾದ
ನಂತರ, ಬಾಳನಿಗೆ ಎಂದೆಂದೂ ಬಾಗಿ ನಮಸ್ಕರಿಸದಿರುವ
ಏಳು ಸಾವಿರ ಜನರು ಇನ್ನೂ ಇಸ್ರೇಲಿನಲ್ಲಿ ವಾಸ ಮಾಡು
ತ್ತಿದ್ದಾರೆ! ಬಾಳನ ವಿಗ್ರಹಕ್ಕೆ ಎಂದೂ ಮುದ್ದಿಡದ ಆ ಏಳು
ಸಾವಿರ ಜನರನ್ನು ನಾನು ಅಲ್ಲಿ ಉಳಿಸುವೆನು.

### ಎಲೀಷನು ಪ್ರವಾದಿಯಾದನು

19ಎಲೀಯನು ಆ ಸ್ಥಳದಿಂದ ಹೊರಟು ಶಾಫಾಟನ
ಮಗನಾದ ಎಲೀಷನನ್ನು ಕಂಡುಹಿಡಿಯಲು ಹೋದನು.
ಎಲೀಷನು ಹನ್ನೆರಡು ಎಕರೆ ಭೂಮಿಯನ್ನು ಉಳುತ್ತಿ
ದ್ದನು. ಎಲೀಯನು ಬಂದಾಗ ಎಲೀಷನು ಕಡೆಯ ಎಕರೆ
ಯನ್ನು ಉಳುತ್ತಿದ್ದನು. ಎಲೀಯನು ಎಲೀಷನ ಹತ್ತಿರಕ್ಕೆ
ಹೋಗಿ ತನ್ನ ಮೇಲಂಗಿಯನ್ನು ಎಲೀಷನಿಗೆ ತೊಡಿಸಿ
ದನು. 20ಎಲೀಷನು ತಕ್ಷಣ ತನ್ನ ಎತ್ತುಗಳನ್ನು ಬಿಟ್ಟು
ಎಲೀಯನ ಹಿಂದೆ ಹೋದನು. ಎಲೀಷನು,“ನನ್ನ
ತಾಯಿಗೆ ಮುದ್ದಿಟ್ಟು, ತಂದೆಗೆ ನಮಸ್ಕರಿಸಿ, ನಿನ್ನನ್ನು
ಹಿಂಬಾಲಿಸುತ್ತೇನೆ” ಎಂದು ಹೇಳಿದನು.

ಎಲೀಯನು, “ಸರಿ, ನಾನು ನಿನ್ನನ್ನು ತಡೆಯುವುದಿಲ್ಲ”
ಎಂದು ಉತ್ತರಿಸಿದನು.

21ನಂತರ ಎಲೀಷನು ಹೋಗಿ ತಾನು ಉಳುತ್ತಿದ್ದ ಎತ್ತು
ಗಳನ್ನು ವಧಿಸಿ, ಮಾಂಸವನ್ನು ನೊಗದಿಂದಲೇ ಬೇಯಿಸಿ
ಜನರೆಲ್ಲರಿಗೆ ಔತಣವನ್ನು ಏರ್ಪಡಿಸಿದನು. ನಂತರ
ಅವನು ಎಲೀಯನನ್ನು ಹಿಂಬಾಲಿಸಿ ಅವನ ಸಹಾಯಕ
ನಾದನು.

### ಬೆನ್ಹದದ ಮತ್ತು ಅಹಾಬ ಇವರ ಯುದ್ಧ

20 ಬೆನ್ಹದದನು ಅರಾಮಿನ ರಾಜ. ಅವನು ತನ್ನ
ಸೇನೆಯನ್ನೆಲ್ಲ ಒಟ್ಟಾಗಿ ಸೇರಿಸಿದನು. ಅವನ
ಹತ್ತಿರ ಮೂವತ್ತೆರಡು ಮಂದಿ ರಾಜರಿದ್ದರು. ಅವರ ಬಳಿ
ಕುದುರೆಗಳೂ ರಥಗಳೂ ಇದ್ದವು. ಅವರು ಸಮಾರ್ಯಕ್ಕೆ
ವಿರುದ್ಧವಾಗಿ ಹೋಗಿ ಅದಕ್ಕೆ ಮುತ್ತಿಗೆ ಹಾಕಿದರು.
2ರಾಜನು ಆ ನಗರದಲ್ಲಿದ್ದ ಇಸ್ರೇಲಿನ ರಾಜನಾದ
ಅಹಾಬನ ಬಳಿಗೆ ತನ್ನ ಸಂದೇಶಕರನ್ನು ಕಳುಹಿಸಿದನು.
3ಅವನ ಸಂದೇಶವು ಹೀಗಿತ್ತು: “ಬೆನ್ಹದದನು ಇಂತೆನ್ನು
ವನು, ‘ನೀವು ನನಗೆ ನಿಮ್ಮಲ್ಲಿರುವ ಬೆಳ್ಳಿಬಂಗಾರಗಳನ್ನು
ಒಪ್ಪಿಸಬೇಕು. ನಿಮ್ಮ ಪತ್ನಿಯರನ್ನು ಮತ್ತು ಮಕ್ಕಳನ್ನು
ನನಗೆ ಒಪ್ಪಿಸಲೇಬೇಕು.”

4ಇಸ್ರೇಲಿನ ರಾಜನು, “ನನ್ನ ಒಡೆಯನಾದ ರಾಜನೇ,
ಈಗ ನಾನು ನಿನ್ನವನೇ. ನನ್ನ ಬಳಿ ಇರುವುದೆಲ್ಲವೂ
ನಿನ್ನದೇ” ಎಂದು ಉತ್ತರಿಸಿದನು.

5ನಂತರ ಆ ಸಂದೇಶಕರು ಅಹಾಬನ ಹತ್ತಿರಕ್ಕೆ ಹಿಂದಿ
ರುಗಿ ಬಂದು, “ಬೆನ್ಹದದನು ಇಂತೆನ್ನುತ್ತಾನೆ, ‘ನೀನು
ನಿನ್ನಲ್ಲಿರುವ ಎಲ್ಲಾ ಬೆಳ್ಳಿಬಂಗಾರವನ್ನು ಮತ್ತು ನಿನ್ನ ಪತ್ನಿ
ಯರನ್ನು ಮತ್ತು ಮಕ್ಕಳನ್ನು ನನಗೆ ಒಪ್ಪಿಸಲೇಬೇಕೆಂದು
ನಾನು ಮುಂಚೆಯೇ ನಿನಗೆ ತಿಳಿಸಿದ್ದೇನೆ. 6ನಾಳೆ ಇದೇ
ಸಮಯದಲ್ಲಿ, ನಿನ್ನ ಅರಮನೆ ಮತ್ತು ನಿನ್ನ ಅಧೀನದ
ಲ್ಲಿರುವ ಅಧಿಕಾರಿಗಳ ಮನೆಗಳನ್ನು ಶೋಧಿಸಲು ನಾನು
ನನ್ನ ಜನರನ್ನು ಕಳುಹಿಸುತ್ತೇನೆ. ನನ್ನ ಜನರು ತಮಗೆ
ಇಷ್ಟವಾದುದನ್ನು ತೆಗೆದುಕೊಳ್ಳುತ್ತಾರೆ’” ಎಂದು ಹೇಳಿ
ದರು. 7ಆದುದರಿಂದ ಅಹಾಬನು ತನ್ನ ರಾಜ್ಯದ ಹಿರಿಯ
ರೆಲ್ಲರ ಒಂದು ಸಭೆಯನ್ನು ಕರೆದು, “ನೋಡಿ, ಬೆನ್ಹದ
ದನು ಕೇಡು ಮಾಡಬೇಕೆಂದಿದ್ದಾನೆ. ನನ್ನ ಪತ್ನಿಯರನ್ನು,
ಮಕ್ಕಳನ್ನು ಮತ್ತು ಬೆಳ್ಳಿಬಂಗಾರಗಳನ್ನು ತನಗೆ ಒಪ್ಪಿಸ
ಬೇಕೆಂದು ಅವನು ನನ್ನನ್ನು ಮೊದಲು ಕೇಳಿದ್ದನು. ನಾನು
ಅದಕ್ಕೆ ಒಪ್ಪಿಕೊಂಡಿದ್ದೆನು. ಈಗ ಅವನು ಎಲ್ಲವನ್ನೂ
ತೆಗೆದುಕೊಳ್ಳಲು ಅಪೇಕ್ಷೆಪಟ್ಟಿದ್ದಾನೆ” ಎಂದು
ಹೇಳಿದನು.

8ಆದರೆ ಹಿರಿಯರೆಲ್ಲರು ಮತ್ತು ಜನರೆಲ್ಲರು, “ಅವನ
ಮಾತಿಗೆ ಒಪ್ಪಬೇಡ. ಅವನು ಹೇಳಿದ್ದನ್ನು ನೀನು
ಮಾಡಬೇಡ”ಎಂದು ಹೇಳಿದರು.

9ಅಹಾಬನು ಬೆನ್ಹದದನ ಸಂದೇಶಕರಿಗೆ, “ನನ್ನ
ಒಡೆಯನಾದ ರಾಜನಿಗೆ ಇದನ್ನು ತಿಳಿಸಿರಿ: ‘ನೀನು
ಮೊದಲು ಹೇಳಿದ್ದನ್ನು ನಾನು ಮಾಡುತ್ತೇನೆ. ಆದರೆ ನಿನ್ನ
ಎರಡನೆಯ ಆಜ್ಞೆಯನ್ನು ನೆರವೇರಿಸಲು ನನ್ನಿಂದ
ಸಾಧ್ಯವಿಲ್ಲ” ಎಂದು ಹೇಳಿದನು.

ರಾಜನಾದ ಬೆನ್ಹದದನ ಜನರು ಈ ಸಂದೇಶವನ್ನು
ರಾಜನಿಗೆ ತಿಳಿಸಿದರು. 10ನಂತರ ಅವರು ಬೆನ್ಹದದನ
ಮತ್ತೊಂದು ಸಂದೇಶದೊಂದಿಗೆ ಹಿಂದಿರುಗಿ ಬಂದರು.
ಆ ಸಂದೇಶವು ಹೀಗಿತ್ತು: “ನಾನು ಸಮಾರ್ಯವನ್ನು
ಸಂಪೂರ್ಣವಾಗಿ ನಾಶಗೊಳಿಸುತ್ತೇನೆ. ಆ ನಗರದಲ್ಲಿ
ಏನನ್ನೂ ಉಳಿಸುವುದಿಲ್ಲವೆಂದು ನಾನು ಪ್ರಮಾಣ
ಮಾಡುತ್ತೇನೆ. ನನ್ನ ಜನರು ಆ ನಗರವನ್ನು ಕಂಡು
ಹಿಡಿಯಲಾಗದಂತೆ ಮತ್ತು ಮನೆಗೆ ತೆಗೆದುಕೊಂಡು
ಹೋಗಲು ಒಂದು ಹಿಡಿ ಧೂಳೂ ಉಳಿಯದಂತೆ ಮಾಡಿ
ಬಿಡುತ್ತಾರೆ. ನಾನು ಇದನ್ನು ಮಾಡದೆ ಹೋದರೆ ದೇವರು
ನನ್ನನ್ನು ನಾಶಪಡಿಸಲಿ!”

11ರಾಜನಾದ ಅಹಾಬನು, “ಯುದ್ಧಕ್ಕೆ ಹೋಗುವ
ಸೈನಿಕನು ತನ್ನ ಆಯುಧಗಳನ್ನು ಧರಿಸಿಕೊಳ್ಳುವಾಗ ಹೆಚ್ಚಳ
ಪಡದೆ, ಯುದ್ಧವಾದ ಮೇಲೆ ತನ್ನ ಆಯುಧಗಳನ್ನು
ಬಿಚ್ಚಿಡುವಾಗ ಹೆಚ್ಚಳಪಡುತ್ತಾನೆಂಬುದನ್ನು ಬೆನ್ಹದದನಿಗೆ
ಹೇಳಿ” ಎಂದು ಉತ್ತರಿಸಿದನು.

12ರಾಜನಾದ ಬೆನ್ಹದದನು ಇತರ ಅರಸರೊಡನೆ ಅವನ
ಗುಡಾರದಲ್ಲಿ ಕುಡಿಯುತ್ತಾ ಮತ್ತೇರಿಸಿಕೊಳ್ಳುತ್ತಿದ್ದನು.
ಆ ಸಮಯದಲ್ಲಿ ರಾಜನಾದ ಅಹಾಬನಿಂದ ಬಂದ
ಸಂದೇಶವನ್ನು ಸಂದೇಶಕರು ಅವನಿಗೆ ಹೇಳಿದರು. ರಾಜ
ನಾದ ಬೆನ್ಹದದನು ಆ ನಗರಕ್ಕೆ ಮುತ್ತಿಗೆ ಹಾಕಲು
ಸಿದ್ಧರಾಗುವಂತೆ ತನ್ನ ಜನರಿಗೆ ಆಜ್ಞಾಪಿಸಿದನು. ಆದುದ
ರಿಂದ ಜನರು ಯುದ್ಧಮಾಡಲು ತಮ್ಮತಮ್ಮ ಸ್ಥಳಗಳಿಗೆ
ಹೋದರು. 13ಅದೇ ಸಮಯಕ್ಕೆ ಒಬ್ಬ ಪ್ರವಾದಿಯು
ರಾಜನಾದ ಅಹಾಬನ ಬಳಿಗೆ ಹೋಗಿ,“ ರಾಜನಾದ

ಅಹಾಬನೇ, ಯೆಹೋವನು ನಿನಗೆ ಇಂತೆನ್ನುತ್ತಾನೆ, ‘ಆ
ಮಹಾ ಸೇನೆಯನ್ನು ನೀನು ನೋಡಿದೆಯಾ! ಯೆಹೋವ
ನಾದ ನಾನು, ಈ ದಿನ ಆ ಸೇನೆಯನ್ನು ಸೋಲಿಸುವಂತೆ
ನಿನಗೆ ಅವಕಾಶ ಮಾಡುತ್ತೇನೆ. ಅನಂತರ ನಾನೇ
ಯೆಹೋವನೆಂಬುದು ನಿನಗೆ ತಿಳಿಯುತ್ತದೆ’’ ಎಂದು
ಹೇಳಿದನು.
14ಅಹಾಬನು, ‘‘ಅವರನ್ನು ಸೋಲಿಸಲು ನೀನು
ಯಾರನ್ನು ಬಳಸಿಕೊಳ್ಳುವೆ?’’ ಎಂದನು.
ಪ್ರವಾದಿಯು, ‘‘ಜಿಲ್ಲೆಗಳ ರಾಜ್ಯಪಾಲರುಗಳ ಸೇವೆ
ಮಾಡುತ್ತಿರುವ ಯೌವನಸ್ಥರನ್ನು ಬಳಸಿಕೊಳ್ಳುತ್ತೇನೆ
ಎಂದು ಯೆಹೋವನು ಹೇಳುತ್ತಾನೆ’’ ಎಂದು ಉತ್ತರಿ
ಸಿದನು.
ನಂತರ ರಾಜನು, ‘‘ಯುದ್ಧವನ್ನು ಆರಂಭಿಸುವವರು
ಯಾರು?’’ ಎಂದು ಕೇಳಿದನು.
‘‘ನೀನೇ’’ ಎಂದು ಪ್ರವಾದಿಯು ಉತ್ತರಿಸಿದನು.
15ಅಹಾಬನು ಜಿಲ್ಲೆಗಳ ರಾಜ್ಯಪಾಲರುಗಳ ಸೇವೆ
ಮಾಡುತ್ತಿರುವ ಯೌವನಸ್ಥರನ್ನು ಒಟ್ಟಾಗಿ ಸೇರಿಸಿದನು.
ಅಲ್ಲಿ ಇನ್ನೂರ ಮೂವತ್ತೆರಡು ಮಂದಿ ಯುವಜನರಿ
ದ್ದರು. ನಂತರ ರಾಜನು ಇಸ್ರೇಲಿನ ಸೈನ್ಯವನ್ನು ಒಟ್ಟಾಗಿ
ಕರೆದನು. ಅವರಲ್ಲಿ ಒಟ್ಟು ಏಳುಸಾವಿರ ಸೈನಿಕರಿದ್ದರು.
16ಮಧ್ಯಾಹ್ನದ ವೇಳೆಗೆ, ರಾಜನಾದ ಬೆನ್ಹದದನು ಮತ್ತು
ಅವನ ಸಹಾಯಕ್ಕಾಗಿ ಬಂದಿದ್ದ ಮೂವತ್ತೆರಡು ಮಂದಿ
ರಾಜರು, ಅವರ ಗುಡಾರಗಳಲ್ಲಿ ಕುಡಿಯುತ್ತಾ ಮತ್ತೇರಿಸಿ
ಕೊಳ್ಳುತ್ತಿದ್ದರು. ಆ ಸಮಯದಲ್ಲಿ ರಾಜನಾದ ಅಹಾಬನ
ಆಕ್ರಮಣವು ಆರಂಭವಾಯಿತು. 17ಮೊದಲು ಯುವ
ಸಹಾಯಕರು ಆಕ್ರಮಣ ಮಾಡಿದರು. ರಾಜನಾದ
ಬೆನ್ಹದದನ ಜನರು, ಸಮಾರ್ಯದಿಂದ ಸೈನಿಕರು ಹೊರಗೆ
ಬಂದಿದ್ದಾರೆಂಬುದನ್ನು ಅವನಿಗೆ ತಿಳಿಸಿದರು.
18ಬೆನ್ಹದದನು, ‘‘ಅವರು ಪ್ರಾಯಶಃ ಹೋರಾಡಲು
ಬಂದಿರಬಹುದು ಅಥವಾ ಅವರು ಶಾಂತಿಸಂಧಾನಕ್ಕಾಗಿ
ಬಂದಿರಬಹುದು. ಅವರು ಯಾವುದಕ್ಕಾಗಿ ಬಂದಿದ್ದರೂ
ಅವರನ್ನು ಜೀವಸಹಿತ ಬಂಧಿಸಿರಿ’’ ಎಂದು ಹೇಳಿದನು.
19ಜಿಲ್ಲೆಗಳ ರಾಜ್ಯಪಾಲರುಗಳ ಸೇವೆ ಮಾಡುತ್ತಿದ್ದ
ಯುವಕರು ಆಕ್ರಮಣದ ಮುಂಚೂಣಿಯಲ್ಲಿದ್ದು,
ಇಸ್ರೇಲಿನ ಸೇನೆಯು ಅವರನ್ನು ಹಿಂಬಾಲಿಸುತ್ತಿತ್ತು.
20ಆದರೆ ಇಸ್ರೇಲಿನ ಪ್ರತಿಯೊಬ್ಬನೂ ತನ್ನ ಮೇಲೆ ಬಿದ್ದವ
ನನ್ನು ಕೊಂದುಹಾಕುತ್ತಿದ್ದನು. ಅರಾಮ್ಯದ ಜನರು
ಓಡಿಹೋಗಲು ಆರಂಭಿಸಿದರು. ಇಸ್ರೇಲಿನ ಸೈನ್ಯವು
ಅವರನ್ನು ಅಟ್ಟಿಸಿಕೊಂಡು ಹೋಯಿತು. ರಾಜನಾದ
ಬೆನ್ಹದದನು ಅಶ್ವಸೇನೆಯ ಕುದುರೆಯೊಂದರ ಮೇಲೆ
ಕುಳಿತು ತಪ್ಪಿಸಿಕೊಂಡನು. 21ರಾಜನಾದ ಅಹಾಬನು ತನ್ನ
ಸೈನ್ಯವನ್ನು ಮುನ್ನಡೆಸಿ, ಅರಾಮ್ಯರ ಸೇನೆಯಿಂದ ರಥಗ
ಳನ್ನೂ ಅಶ್ವಸೇನೆಯನ್ನೂ ಸೋಲಿಸಿದನು. ಅರಾಮ್ಯರ
ಸೇನೆಯ ಮಹಾ ಅಪಜಯಕ್ಕೆ ರಾಜನಾದ ಅಹಾಬನು
ಕಾರಣನಾದನು.
22ಆಗ ಆ ಪ್ರವಾದಿಯು ರಾಜನಾದ ಅಹಾಬನಲ್ಲಿಗೆ
ಹೋಗಿ,‘‘ಅರಾಮಿನ ರಾಜನಾದ ಬೆನ್ಹದದನು ಮುಂದಿನ
ವಸಂತಮಾಸದಲ್ಲಿ ನಿನ್ನ ವಿರುದ್ಧ ಯುದ್ಧಮಾಡಲು ಮತ್ತೆ
ಬರುತ್ತಾನೆ. ಈಗ ನೀನು ಮನೆಗೆ ಹೋಗಿ ನಿನ್ನ ಸೈನ್ಯವನ್ನು
ಬಲಪಡಿಸು. ಅವನ ವಿರುದ್ಧ ನೀನು ಸಮರ್ಥನಾಗಲು
ಎಚ್ಚರಿಕೆಯಿಂದ ಉಪಾಯಗಳನ್ನು ಮಾಡು’’ ಎಂದು
ಹೇಳಿದನು.

## ಬೆನ್ಹದದನ ಮರು ಆಕ್ರಮಣ

23ರಾಜನಾದ ಬೆನ್ಹದದನ ಅಧಿಕಾರಿಗಳು ಅವನಿಗೆ,
‘‘ಇಸ್ರೇಲಿನ ದೇವರು ಬೆಟ್ಟಗಳ ದೇವರಾಗಿದ್ದಾನೆ. ನಾವು
ಬೆಟ್ಟಪ್ರದೇಶದಲ್ಲಿ ಹೋರಾಟ ಮಾಡಿದೆವು. ಆದ್ದರಿಂದ
ಇಸ್ರೇಲಿನ ಜನರು ಗೆದ್ದರು. ಅವರೊಡನೆ ಸಮತಟ್ಟಾದ
ಪ್ರದೇಶದಲ್ಲಿ ಹೋರಾಟ ಮಾಡೋಣ. ಆಗ ನಾವು
ಗೆಲ್ಲುತ್ತೇವೆ. 24ನೀನು ಮಾಡಬೇಕಾದದ್ದೇನೆಂದರೆ,
ಮೂವತ್ತೆರಡು ಮಂದಿ ರಾಜರು ಸೇನೆಯನ್ನು ಮುನ್ನಡೆ
ಸುವುದು ಬೇಡ; ಅವರ ಸೇನೆಯನ್ನು ಸೇನಾಧಿಪತಿಗಳೇ
ಮುನ್ನಡೆಸಲಿ.
25‘‘ಹಿಂದೆ ನೀನು ಕಳೆದುಕೊಂಡ ಸೇನೆಯಂತಹ
ಮತ್ತೊಂದು ಸೈನ್ಯವನ್ನೀಗ ನೀನು ಒಟ್ಟುಗೂಡಿಸು, ಆ
ಸೇನೆಯಲ್ಲಿದ್ದಂತಹ ಕುದುರೆಗಳನ್ನೂ ರಥಗಳನ್ನೂ
ಒಟ್ಟಾಗಿ ಸೇರಿಸು. ನಂತರ ಇಸ್ರೇಲರೊಡನೆ ಸಮತಟ್ಟಾದ
ಪ್ರದೇಶದಲ್ಲಿ ನಾವು ಹೋರಾಟ ಮಾಡೋಣ. ಆಗ
ನಾವು ಜಯಗಳಿಸುತ್ತೇವೆ’’ ಎಂದು ಹೇಳಿದರು.
ಬೆನ್ಹದದನು ಅವರ ಸಲಹೆಯನ್ನು ಅನುಸರಿಸಿ ಅವರು
ಹೇಳಿದಂತೆಯೇ ಮಾಡಿದನು.
26ವಸಂತಮಾಸದಲ್ಲಿ ಬೆನ್ಹದದನು ಅರಾಮ್ಯದ
ಜನರನ್ನು ಒಟ್ಟುಗೂಡಿಸಿದನು. ಅವನು ಇಸ್ರೇಲರ
ವಿರುದ್ಧ ಹೋರಾಡಲು ಅಫೇಕಕ್ಕೆ ಹೋದನು.
27ಇಸ್ರೇಲರೂ ಯುದ್ಧಕ್ಕೆ ಸಿದ್ಧರಾದರು. ಇಸ್ರೇಲಿನ
ಜನರು ಅರಾಮ್ಯದ ಸೇನೆಯೊಡನೆ ಹೋರಾಡಲು
ಹೋದರು. ಅವರು ಅರಾಮ್ಯದ ಪಾಳೆಯಕ್ಕೆ ಎದುರಾಗಿ
ತಮ್ಮ ಪಾಳೆಯ ಮಾಡಿಕೊಂಡರು. ಶತ್ರುಗಳಿಗೆ ಹೋಲಿಸಿ
ದರೆ ಇಸ್ರೇಲರು ಆಡುಗಳ ಎರಡು ಚಿಕ್ಕ ಮಂದೆಯಂತೆ
ಕಾಣುತ್ತಿದ್ದರು. ಆದರೆ ಅರಾಮ್ಯದ ಸೈನಿಕರು ಎಲ್ಲಾ
ಪ್ರದೇಶವನ್ನು ವ್ಯಾಪಿಸಿದ್ದರು.
28ಇಸ್ರೇಲಿನ ರಾಜನ ಹತ್ತಿರಕ್ಕೆ ಬಂದ ದೇವಮನುಷ್ಯನ
ಸಂದೇಶವು ಇಂತಿದೆ: ‘‘ಯೆಹೋವನು ಇಂತೆಂದನು:
‘ಯೆಹೋವನಾದ ನನ್ನನ್ನು ಬೆಟ್ಟಗಳ ದೇವರೆಂದು

ಅರಾಮ್ಯದ ಜನರು ಹೇಳಿದ್ದಾರೆ. ನಾನು ಕಣಿವೆಗಳ ದೇವರಲ್ಲವೆಂದು ಸಹ ಅವರು ಯೋಚಿಸಿಕೊಂಡಿದ್ದಾರೆ. ಆದುದರಿಂದ ಈ ಮಹಾಸೇನೆಯನ್ನು ನೀನು ಸೋಲಿಸುವಂತೆ ನಾನು ಅವಕಾಶ ಮಾಡುತ್ತೇನೆ. ನಾನೇ ಯೆಹೋವನೆಂಬುದು ಆಗ ನಿನಗೇ ತಿಳಿಯುತ್ತದೆ!'''

29ಈ ಎರಡು ಸೈನ್ಯಗಳೂ ಎದುರುಬದುರಾಗಿ ಏಳು
ದಿನಗಳ ಕಾಲ ಪಾಳೆಯವನ್ನು ಹೂಡಿದವು. ಏಳನೆಯ ದಿನ
ಯುದ್ಧವು ಆರಂಭವಾಯಿತು. ಇಸ್ರೇಲರು ಒಂದೇ
ದಿನದಲ್ಲಿ ಅರಾಮ್ಯರ ಒಂದು ಲಕ್ಷ ಮಂದಿ ಸೈನಿಕರನ್ನು
ಕೊಂದುಹಾಕಿದರು. 30ಬದುಕಿ ಉಳಿದವರು ಅಫೇಕ್
ನಗರಕ್ಕೆ ಓಡಿಹೋದರು. ಆ ನಗರದ ಗೋಡೆಯು
ಉಳಿದಿದ್ದ ಇಪ್ಪತ್ತೇಳು ಸಾವಿರ ಜನರ ಮೇಲೆ ಉರುಳಿ
ಬಿತ್ತು. ಬೆನ್ಹದದನೂ ನಗರಕ್ಕೆ ಓಡಿಹೋಗಿ ಒಂದು
ಕೊಠಡಿಯಲ್ಲಿ ಅವಿತುಕೊಂಡನು. 31ಅವನ ಸೇವಕರು
ಅವನಿಗೆ, ''ಇಸ್ರೇಲಿನ ರಾಜರುಗಳು ಕನಿಕರವುಳ್ಳವರೆಂದು ನಾವು ಕೇಳಿದ್ದೇವೆ. ನಾವು ಗೋಣಿತಟ್ಟುಗಳನ್ನು (ನಮ್ಮ ನಡುಗಳಿಗೆ) ಕಟ್ಟಿಕೊಂಡು. ಹಗ್ಗಗಳನ್ನು ನಮ್ಮ ತಲೆಗಳ ಮೇಲೆ ಹಾಕಿಕೊಂಡು ಇಸ್ರೇಲಿನ ರಾಜನ ಬಳಿಗೆ ಹೋಗೋಣ. ಅವನು ನಮ್ಮ ಜೀವವನ್ನು ಉಳಿಸಬಹುದು'' ಎಂದು ಹೇಳಿದರು.

32ಅವರು ಗೋಣಿತಟ್ಟುಗಳನ್ನು ಧರಿಸಿಕೊಂಡು, ತಲೆಯ ಮೇಲೆ ಹಗ್ಗವನ್ನು ಹಾಕಿಕೊಂಡು, ಇಸ್ರೇಲಿನ ರಾಜನ ಬಳಿಗೆ ಬಂದರು. ಅವರು, ''ನಿಮ್ಮ ಸೇವಕನಾದ ಬೆನ್ಹದದನು ಇಂತೆನ್ನುವನು: 'ದಯವಿಟ್ಟು ನನ್ನನ್ನು ಜೀವಸಹಿತ ಬಿಡು'' ಎಂದರು.

ಅಹಾಬನು, ''ಅವನಿನ್ನೂ ಜೀವಸಹಿತ ಇದ್ದಾನೆಯೇ? ಅವನು ನನ್ನ ಸೋದರ'' ಎಂದು ಉತ್ತರಿಸಿದನು.

33ರಾಜನಾದ ಅಹಾಬನು ತಾನು ಬೆನ್ಹದದನನ್ನು ಕೊಲ್ಲುವುದಿಲ್ಲವೆಂಬುದನ್ನು ಯಾವುದಾದರೂ ಸೂಚನೆಯ ಮೂಲಕ ತಿಳಿಸಬಹುದೆಂದು ಬೆನ್ಹದದನ ಜನರು ಅಪೇಕ್ಷೆಪಟ್ಟಿದ್ದರು. ಅಹಾಬನು ಬೆನ್ಹದದನನ್ನು ತನ್ನ ಸೋದರನೆಂದು ಕರೆದಾಗ, ಸಲಹೆಗಾರರು ತ್ವರಿತವಾಗಿ, ''ಹೌದು! ಬೆನ್ಹದದನು ನಿನ್ನ ಸೋದರನೇ'' ಎಂದರು. ಅಹಾಬನು, ''ಅವನನ್ನು ನನ್ನ ಬಳಿಗೆ ಕರೆತನ್ನಿ'' ಎಂದನು. ಬೆನ್ಹದದನು ರಾಜನಾದ ಅಹಾಬನ ಬಳಿಗೆ ಬಂದನು. ರಾಜನಾದ ಅಹಾಬನು ಅವನನ್ನು ತನ್ನೊಡನೆ ರಥದಲ್ಲಿ ಕುಳ್ಳಿರಿಸಿಕೊಂಡನು.

34ಬೆನ್ಹದದನು ಅವನಿಗೆ, ''ಅಹಾಬನೇ, ನನ್ನ ತಂದೆಯು ನಿನ್ನ ತಂದೆಯಿಂದ ವಶಪಡಿಸಿಕೊಂಡಿರುವ ಪಟ್ಟಣಗಳನ್ನು ನಿನಗೇ ಬಿಟ್ಟುಬಿಡುತ್ತೇನೆ. ನನ್ನ ತಂದೆಯು ಸಮಾರ್ಯದಲ್ಲಿ ಮಾಡಿದಂತೆ ನೀನೂ ದಮಸ್ಕದಲ್ಲಿ ಅಂಗಡಿಗಳನ್ನು ಹಾಕಬಹುದು'' ಎಂದನು.

ಅಹಾಬನು, ''ನೀನು ಇದಕ್ಕೆ ಒಪ್ಪಿಕೊಂಡರೆ, ನಾನು ನಿನ್ನನ್ನು ಸ್ವತಂತ್ರವಾಗಿ ಹೋಗಲು ಬಿಡುತ್ತೇನೆ'' ಎಂದನು. ಆ ಇಬ್ಬರು ರಾಜರುಗಳು ಶಾಂತಿಸಂಧಾನವನ್ನು ಮಾಡಿಕೊಂಡರು. ರಾಜನಾದ ಅಹಾಬನು ಬೆನ್ಹದದನಿಗೆ ಸ್ವತಂತ್ರವನ್ನು ಕೊಟ್ಟು ಕಳುಹಿಸಿದನು.

### ಅಹಾಬನ ವಿರುದ್ಧವಾಗಿ ಪ್ರವಾದನೆ

35ಪ್ರವಾದಿಗಳಲ್ಲಿ ಒಬ್ಬನು ಮತ್ತೊಬ್ಬ ಪ್ರವಾದಿಗೆ,
''ನನ್ನನ್ನು ಹೊಡಿ'' ಎಂದು ಹೇಳಿದನು. ಹೀಗೆ ಹೇಳುವಂತೆ ಯೆಹೋವನೇ ಅವನಿಗೆ ಆಜ್ಞಾಪಿಸಿದ್ದನು. ಆದರೆ ಇನ್ನೊಬ್ಬ ಪ್ರವಾದಿಯು ಅವನನ್ನು ಹೊಡೆಯಲಿಲ್ಲ.
36ಆದುದರಿಂದ ಮೊದಲನೆಯ ಪ್ರವಾದಿಯು,
''ಯೆಹೋವನ ಆಜ್ಞೆಗೆ ನೀನು ವಿಧೇಯನಾಗಲಿಲ್ಲ. ನೀನು ಈ ಸ್ಥಳವನ್ನು ಬಿಟ್ಟು ಹೊರಟಾಗ ನಿನ್ನನ್ನು ಒಂದು ಸಿಂಹವು ಕೊಂದುಹಾಕುತ್ತದೆ'' ಎಂದು ಹೇಳಿದನು. ಎರಡನೆಯ ಪ್ರವಾದಿಯು ಆ ಸ್ಥಳವನ್ನು ಬಿಟ್ಟು ಹೊರಟಾಗ ಒಂದು ಸಿಂಹವು ಅವನನ್ನು ಕೊಂದುಹಾಕಿತು.

37ಮೊದಲನೆಯ ಪ್ರವಾದಿಯು ಇನ್ನೊಬ್ಬ ಮನುಷ್ಯನ ಹತ್ತಿರಕ್ಕೆ ಹೋಗಿ, ''ನನ್ನನ್ನು ಹೊಡಿ!'' ಎಂದು ಅವನಿಗೆ ಹೇಳಿದನು.

ಈ ಮನುಷ್ಯನು ಅವನನ್ನು ಹೊಡೆದನು. ಪ್ರವಾದಿಗೆ
ಗಾಯವಾಯಿತು. 38ಪ್ರವಾದಿಯು ತನ್ನ ಕಣ್ಣಿನ ಮೇಲೆ
ಬಟ್ಟೆಯನ್ನು ಕಟ್ಟಿಕೊಂಡನು. ತನ್ನನ್ನು ಯಾರೂ ಗುರುತಿಸಬಾರದೆಂದು ಅವನು ಹೀಗೆ ಕಟ್ಟಿಕೊಂಡನು. ಬಳಿಕ ಆ ಪ್ರವಾದಿಯು ಹೋಗಿ, ರಾಜನಿಗಾಗಿ ರಸ್ತೆಯಂಚಿನಲ್ಲಿ
ಕಾಯುತ್ತಿದ್ದನು. 39ರಾಜನು ಅಲ್ಲಿಗೆ ಬಂದಾಗ,
ಪ್ರವಾದಿಯು ಅವನಿಗೆ, ''ನಾನು ಯುದ್ಧದಲ್ಲಿ ಹೋರಾಡುವುದಕ್ಕೆ ಹೋಗಿದ್ದೆನು. ನಿನ್ನವನಾದ ಒಬ್ಬ ಮನುಷ್ಯನು ಶತ್ರುವಿನ ಸೈನಿಕನೊಬ್ಬನನ್ನು ನನ್ನ ಬಳಿಗೆ ಕರೆದುಕೊಂಡು ಬಂದು, 'ಈ ಮನುಷ್ಯನನ್ನು ರಕ್ಷಿಸು. ಇವನು ಓಡಿಹೋದರೆ, ಇವನ ಜೀವಕ್ಕೆ ಬದಲಾಗಿ ನಿನ್ನ ಜೀವವನ್ನು ಕೊಡಬೇಕಾಗುವುದು ಅಥವಾ ಬೆಳ್ಳಿಯ ಮೂವತ್ನಾಲ್ಕು ಕಿಲೋ. ಗ್ರಾಂ. ದಂಡ ಕೊಡಬೇಕಾಗುವುದು' ಎಂದನು.
40ಆದರೆ ನಾನು ಇತರ ಕೆಲಸಗಳಲ್ಲಿ ನಿರತನಾಗಿದ್ದಾಗ, ಆ
ಮನುಷ್ಯನು ಓಡಿಹೋದನು'' ಎಂದು ಹೇಳಿದನು.

ಇಸ್ರೇಲಿನ ರಾಜನು, ''ಆ ಸೈನಿಕನು ತಪ್ಪಿಸಿಕೊಂಡು ಹೋಗಲು ಅವಕಾಶ ಮಾಡಿಕೊಟ್ಟ ನೀನು ನಿನ್ನನ್ನು ತಪ್ಪಿತಸ್ಥನೆಂದು ಒಪ್ಪಿಕೊಂಡಿರುವೆ. ಆದ್ದರಿಂದ, ಅದರ ಪರಿಹಾರವೂ ನಿನಗೆ ತಿಳಿದಿದೆ. ಆ ಮನುಷ್ಯನೇನು ಹೇಳಿದನೊ ಅದನ್ನು ನೀನು ಮಾಡಲೇಬೇಕು'' ಎಂದು
ಉತ್ತರಿಸಿದನು. 41ಆಗ ಆ ಪ್ರವಾದಿಯು ತನ್ನ ಕಣ್ಣುಗಳ
ಮೇಲಿನ ಬಟ್ಟೆಯನ್ನು ಸರಿಸಿದ್ದರಿಂದ ಅವನು

ಪ್ರವಾದಿಗಳಲ್ಲಿ ಒಬ್ಬನೆಂಬುದು ಇಸ್ರೇಲಿನ ರಾಜನಿಗೆ ತಿಳಿ
ಯಿತು. 42ಬಳಿಕ ಪ್ರವಾದಿಯು ರಾಜನಿಗೆ, ''ಯೆಹೋ
ವನು ನಿನಗೆ ಇಂತೆನ್ನುತ್ತಾನೆ, 'ನಾನು ಸಂಹರಿಸೆಂದು
ಹೇಳಿದ ಮನುಷ್ಯನನ್ನು ನೀನು ಸ್ವತಂತ್ರನಾಗಿಸಿದೆ. ಆದ್ದ
ರಿಂದ ಅವನಿಗೆ ಸಂಭವಿಸಬೇಕಾದದ್ದು ನಿನಗೆ ಸಂಭವಿಸು
ವುದು. ನೀನು ಸಾಯುವೆ! ಶತ್ರುಗಳಿಗೆ ಸಂಭವಿಸ
ಬೇಕಾದದ್ದು ನಿನ್ನ ಜನರಿಗೆ ಸಂಭವಿಸುವುದು. ನಿನ್ನ ಜನರು
ಸಾಯುತ್ತಾರೆ!''' ಎಂದು ಹೇಳಿದನು. 43ನಂತರ ರಾಜನು
ಸಮಾರ್ಯದಲ್ಲಿದ್ದ ತನ್ನ ಅರಮನೆಗೆ ಹಿಂದಿರುಗಿದನು.
ಅವನು ಬೇಸರಗೊಂಡಿದ್ದನು ಮತ್ತು ಕೋಪ
ಗೊಂಡಿದ್ದನು.

### ನಾಬೋತನ ದ್ರಾಕ್ಷಿತೋಟ

21 ಸಮಾರ್ಯದ ರಾಜನಾದ ಅಹಾಬನಿಗೆ
ಇಜ್ರೇಲಿನಲ್ಲಿ ಅರಮನೆಯಿತ್ತು. ಆ ಅರ
ಮನೆಯ ಹಿತ್ತಲಿನಲ್ಲಿ ಒಂದು ದ್ರಾಕ್ಷಿತೋಟವಿತ್ತು.
ಇಜ್ರೇಲಿನವನಾದ ನಾಬೋತನೆಂಬ ಹೆಸರಿನ ಮನು
ಷ್ಯನು ಆ ದ್ರಾಕ್ಷಿ ತೋಟದ ಒಡೆಯನಾಗಿದ್ದನು. 2ಒಂದು
ದಿನ ಅಹಾಬನು ನಾಬೋತನಿಗೆ, ''ನಿನ್ನ ದ್ರಾಕ್ಷಿ ತೋಟ
ವನ್ನು ನನಗೆ ಕೊಡು. ನಾನು ಅದನ್ನು ತರಕಾರಿಯ
ತೋಟವನ್ನಾಗಿ ಮಾಡುವೆನು. ನಿನ್ನ ದ್ರಾಕ್ಷಿತೋಟವು ನನ್ನ
ಅರಮನೆಯ ಹತ್ತಿರದಲ್ಲಿದೆ. ನಾನು ಅದಕ್ಕೆ ಬದಲಾಗಿ
ಒಂದು ಉತ್ತಮ ದ್ರಾಕ್ಷಿತೋಟವನ್ನು ನಿನಗೆ ಕೊಡುವೆನು.
ನೀನು ಬಯಸಿದರೆ, ನಾನು ಅದರ ಬೆಲೆಯನ್ನು ಹಣದ
ರೂಪದಲ್ಲಿ ಕೊಡುತ್ತೇನೆ'' ಎಂದು ಹೇಳಿದನು.

3ನಾಬೋತನು, ''ನಾನು ನನ್ನ ಭೂಮಿಯನ್ನು
ಎಂದಿಗೂ ನಿನಗೆ ಕೊಡುವುದಿಲ್ಲ. ಅದು ನನ್ನ ವಂಶಕ್ಕೆ
ಸೇರಿದ್ದು'' ಎಂದು ಉತ್ತರಿಸಿದನು.

4ಅಹಾಬನು ಮನೆಗೆ ಹೋದನು. ಅವನು ನಾಬೋತನ
ಮೇಲೆ ಕೋಪಗೊಂಡನು ಮತ್ತು ಬೇಸರಗೊಂಡನು.
ಇಜ್ರೇಲಿನವನಾದ ನಾಬೋತನು ಹೇಳಿದ ಸಂಗತಿಗಳನ್ನು
ಅವನು ಇಷ್ಟಪಡಲಿಲ್ಲ. (''ನಾನು ನನ್ನ ವಂಶಕ್ಕೆ ಸೇರಿದ
ದ್ರಾಕ್ಷಿತೋಟವನ್ನು ನಿನಗೆ ಕೊಡುವುದಿಲ್ಲ'' ಎಂದು
ನಾಬೋತನು ಹೇಳಿದ್ದನು.) ಅಹಾಬನು ತನ್ನ ಹಾಸಿಗೆ
ಯಲ್ಲಿ ಮಲಗಿ, ಮುಖವನ್ನು ಬೇರೆ ಕಡೆಗೆ ತಿರುಗಿಸಿ
ಕೊಂಡನು. ಅವನು ಊಟಮಾಡಲಿಲ್ಲ. 5ಅಹಾಬನ
ಪತ್ನಿಯಾದ ಈಜೆಬೆಲಳು ಅವನ ಹತ್ತಿರ ಹೋದಳು.
ಈಜೆಬೆಲಳು, ''ನೀನೇಕೆ ತಳಮಳಗೊಂಡಿರುವೆ? ನೀನು
ಏಕೆ ಊಟಮಾಡಲಿಲ್ಲ?'' ಎಂದು ಅವನನ್ನು ಕೇಳಿದಳು.

6ಅಹಾಬನು, ''ನಾನು ಇಜ್ರೇಲಿನ ನಾಬೋತನಿಗೆ,
'ನಿನ್ನ ತೋಟವನ್ನು ನನಗೆ ಕೊಡು. ಅದರ ಪೂರ್ಣ ಬೆಲೆ
ಯನ್ನು ನಿನಗೆ ಕೊಡತ್ತೇನೆ ಅಥವಾ ನೀನು ಬಯಸಿದರೆ,
ನಿನಗೆ ಬೇರೊಂದು ತೋಟವನ್ನು ಕೊಡುತ್ತೇನೆ' ಎಂದು
ಹೇಳಿದೆನು. ಆದರೆ ನಾಬೋತನು ತನ್ನ ತೋಟವನ್ನು
ನನಗೆ ಕೊಡಲಿಲ್ಲ'' ಎಂದು ಉತ್ತರಿಸಿದನು. 7ಈಜೆಬೆ
ಲಳು, ''ನೀನು ಇಸ್ರೇಲಿಗೆಲ್ಲ ರಾಜ! ನಿನ್ನ ಹಾಸಿಗೆಯಿಂದ
ಎದ್ದು ಬಾ. ನೀನು ಸ್ವಲ್ಪ ಊಟಮಾಡಿ, ಸಂತೋಷ
ದಿಂದಿರು. ನಾನು ನಿನಗೆ ನಾಬೋತನ ದ್ರಾಕ್ಷಿ ತೋಟ
ವನ್ನು ಕೊಡಿಸುತ್ತೇನೆ'' ಎಂದು ಹೇಳಿದಳು.

8ನಂತರ ಈಜೆಬೆಲಳು ಕೆಲವು ಪತ್ರಗಳನ್ನು ಬರೆದಳು.
ಅವಳು ಆ ಪತ್ರಗಳಿಗೆ ಅಹಾಬನ ಹೆಸರಿನ ಸಹಿಯನ್ನು
ಮಾಡಿದಳು. ಅಹಾಬನ ಸ್ವಂತ ಮೊಹರನ್ನು ಅವಳು ಆ
ಪತ್ರಗಳಿಗೆ ಹಾಕಿದಳು. ನಾಬೋತನು ಇದ್ದ ಆ
ಪಟ್ಟಣದಲ್ಲಿ ವಾಸವಾಗಿದ್ದ ಮುಖ್ಯ ಜನರಿಗೂ ಹಿರಿ
ಯರಿಗೂ ಅವಳು ಆ ಪತ್ರಗಳನ್ನು ಕಳುಹಿಸಿದಳು. 9ಆ
ಪತ್ರದಲ್ಲಿ ಹೀಗೆ ಬರೆದಿತ್ತು:

ಉಪವಾಸದ ಒಂದು ದಿನವನ್ನು ಗೊತ್ತುಮಾಡಿ, ಆ ದಿನ
ವನ್ನು ಪ್ರಕಟಿಸಿ, ನಂತರ ಪಟ್ಟಣದ ಜನರನ್ನೆಲ್ಲ ಸಭೆ
ಸೇರಿಸಿರಿ. 10ನಾಬೋತನ ಬಗ್ಗೆ ಸುಳ್ಳುಹೇಳುವ ಕೆಲವು
ಜನರನ್ನು ಪತ್ತೆ ಹಚ್ಚಿ. ನಾಬೋತನು ರಾಜನ ವಿರುದ್ಧವಾಗಿ
ಮತ್ತು ದೇವರ ವಿರುದ್ಧವಾಗಿ ಮಾತನಾಡುವುದನ್ನು ನಾವು
ಕೇಳಿಸಿಕೊಂಡೆವೆಂದು ಅವರು ಹೇಳಲೇಬೇಕು. ಆಗ
ನಾಬೋತನನ್ನು ನಗರದಿಂದ ಹೊರಕ್ಕೆ ಕರೆದೊಯ್ದು
ಅವನನ್ನು ಕಲ್ಲೆಸೆದು ಕೊಂದುಹಾಕಿರಿ.

11ಇಜ್ರೇಲಿನ ಹಿರಿಯರು ಮತ್ತು ಪ್ರಮುಖರಾದ
ಜನರು ಆ ಆಜ್ಞೆಗನುಸಾರವಾಗಿ ಮಾಡಿದರು. 12ನಾಯ
ಕರು ಒಂದು ದಿನವನ್ನು ಉಪವಾಸದ ದಿನವಾಗಿ
ಪ್ರಕಟಿಸಿದರು. ಆ ದಿನ ಅವರು ಜನರನ್ನೆಲ್ಲ ಸಭೆಸೇರಿಸಿ
ದರು. ನಾಬೋತನನ್ನು ಜನರೆದುರಿಗೆ ಪ್ರಮುಖವಾದ
ಒಂದು ಸ್ಥಳದಲ್ಲಿ ಅವರು ಕುಳ್ಳಿರಿಸಿದರು. 13ನಾಬೋತನು
ದೇವರ ವಿರುದ್ಧವಾಗಿಯೂ ರಾಜನ ವಿರುದ್ಧವಾಗಿಯೂ
ಮಾತನಾಡಿದ್ದನ್ನು ತಾವು ಕೇಳಿರುವುದಾಗಿ ಇಬ್ಬರು ಅಲ್ಲಿನ
ಜನರಿಗೆ ಹೇಳಿದರು. ಜನರು ನಾಬೋತನನ್ನು ನಗರದ
ಹೊರಕ್ಕೆ ಕರೆದೊಯ್ದು ಅವನನ್ನು ಕಲ್ಲೆಸೆದು ಕೊಂದರು.
14ನಾಯಕರು ಈಜೆಬೆಲಳಿಗೆ ಒಂದು ಸಂದೇಶವನ್ನು ಕಳು
ಹಿಸಿದರು. ಆ ಸಂದೇಶವು ಹೀಗಿತ್ತು: ''ನಾಬೋತನನ್ನು
ಕೊಂದುಹಾಕಲಾಗಿದೆ.''

15ಇದನ್ನು ಕೇಳಿದ ಈಜೆಬೆಲಳು ಅಹಾಬನಿಗೆ,
''ನಾಬೋತನು ಸತ್ತುಹೋದನು. ಈಗ ನೀನು ಹೋಗಿ,
ನಿನಗೆ ಇಷ್ಟವಾದ ಆ ದ್ರಾಕ್ಷಿ ತೋಟವನ್ನು ತೆಗೆದುಕೊ''
ಎಂದು ಹೇಳಿದಳು. 16ಅಹಾಬನು ದ್ರಾಕ್ಷಿತೋಟಕ್ಕೆ
ಹೋಗಿ ಅದನ್ನು ತನ್ನದನ್ನಾಗಿಸಿಕೊಂಡನು.

17ಈ ಸಮಯದಲ್ಲಿ ಯೆಹೋವನು ಎಲೀಯನ ಜೊತೆ
ಯಲ್ಲಿ ಮಾತನಾಡಿದನು. (ಪ್ರವಾದಿಯಾದ ಎಲೀಯನು

ತಿಷ್ಬೇ ಊರಿನವನು.) ಯೆಹೋವನು ಇಂತೆಂದನು:
18‘‘ಸಮಾರ್ಯದಲ್ಲಿ ಆಳುತ್ತಿರುವ ಇಸ್ರೇಲಿನ ರಾಜನಾದ
ಅಹಾಬನ ಬಳಿಗೆ ಹೋಗು. ಅಹಾಬನು ಈಗ
ನಾಬೋತನ ದ್ರಾಕ್ಷಿತೋಟದಲ್ಲಿದ್ದಾನೆ. ಆ ತೋಟವನ್ನು
ತನ್ನ ಸ್ವಾಧೀನಕ್ಕೆ ತೆಗೆದುಕೊಳ್ಳಲು ಅವನು ಅಲ್ಲಿಗೆ
ಹೋಗಿದ್ದಾನೆ. 19ಯೆಹೋವನಾದ ನಾನು ಅವನಿಗೆ ಹೀಗೆ
ಹೇಳಿದೆನೆಂದು ತಿಳಿಸು: ‘ಅಹಾಬನೇ! ನೀನು ನಾಬೋತ
ನನ್ನು ಕೊಂದುಹಾಕಿದೆ. ಈಗ ನೀನು ಅವನ ದ್ರಾಕ್ಷಿ
ತೋಟವನ್ನು ತೆಗೆದುಕೊಳ್ಳುತ್ತಿರುವೆ. ಆದ್ದರಿಂದ ನಾನಿ
ದನ್ನು ನಿನಗೆ ಹೇಳುತ್ತೇನೆ! ನಾಬೋತನು ಸತ್ತ ಸ್ಥಳ
ದಲ್ಲಿಯೇ ನೀನು ಸಹ ಸಾಯುವೆ. ನಾಯಿಗಳು
ನಾಬೋತನ ರಕ್ತವನ್ನು ನೆಕ್ಕಿದ ಸ್ಥಳದಲ್ಲಿಯೇ ನಿನ್ನ
ರಕ್ತವನ್ನೂ ನೆಕ್ಕುತ್ತವೆ!’’’
20ಎಲೀಯನು ಅಹಾಬನ ಹತ್ತಿರಕ್ಕೆ ಹೋದನು.
ಅಹಾಬನು ಎಲೀಯನನ್ನು ಕಂಡು, ‘‘ನೀನು ನನ್ನನ್ನು
ಮತ್ತೆ ಕಂಡುಹಿಡಿದೆ. ನೀನು ಯಾವಾಗಲೂ ನನಗೆ
ವಿರೋಧವಾಗಿರುವೆ’’ ಎಂದನು.

ಎಲೀಯನು, ‘‘ಹೌದು, ನಾನು ನಿನ್ನನ್ನು ಮತ್ತೆ ಕಂಡು
ಹಿಡಿದೆ. ಯೆಹೋವನ ವಿರುದ್ಧ ಪಾಪಮಾಡಲು ನೀನು
ನಿನ್ನ ಜೀವನವನ್ನು ಯಾವಾಗಲೂ ಉಪಯೋಗಿಸು
ತ್ತಿರುವೆ. 21ಆದ್ದರಿಂದ ಯೆಹೋವನು ನಿನಗೆ, ‘ನಾನು
ನಿನ್ನನ್ನು ನಾಶಪಡಿಸುತ್ತೇನೆ. ನಿನ್ನನ್ನು ಮತ್ತು ನಿನ್ನ
ಕುಟುಂಬದ ಪ್ರತಿಯೊಬ್ಬ ಗಂಡಸನ್ನು ನಾನು ಕೊಂದು
ಹಾಕುತ್ತೇನೆ. 22ನೆಬಾಟನ ಮಗನಾದ, ರಾಜನಾದ
ಯಾರೊಬ್ಬಾಮನ ಕುಟುಂಬಕ್ಕೆ ಆದ ಗತಿಯೇ ನಿನ್ನ
ಕುಟುಂಬಕ್ಕೂ ಆಗುವುದು. ರಾಜನಾದ ಬಾಷನ
ಕುಟುಂಬಕ್ಕೆ ಆದ ಗತಿಯೇ ನಿನ್ನ ಕುಟುಂಬಕ್ಕೂ ಆಗು
ವುದು. ಈ ಎರಡು ಕುಟುಂಬಗಳೂ ಸಂಪೂರ್ಣವಾಗಿ
ನಾಶಗೊಂಡವು. ನೀನು ನನ್ನನ್ನು ಕೋಪಗೊಳಿಸಿದ್ದಕ್ಕಾಗಿ
ನಾನು ನಿನಗೆ ಹೀಗೆ ಮಾಡುತ್ತೇನೆ. ಇಸ್ರೇಲಿನ ಜನರು
ಪಾಪಮಾಡುವುದಕ್ಕೆ ನೀನು ಕಾರಣನಾದೆ’’ ಎನ್ನುತ್ತಾನೆ.
23ಇದಲ್ಲದೆ ಯೆಹೋವನು, ‘ನಿನ್ನ ಪತ್ನಿಯಾದ
ಈಜೆಬೆಲಳ ದೇಹವನ್ನು, ಇಜ್ರೇಲ್ ನಗರದಲ್ಲಿ ನಾಯಿ
ಗಳು ತಿನ್ನುತ್ತವೆ, 24ನಿನ್ನ ಕುಟುಂಬದಲ್ಲಿ ಯಾರಾದರೂ
ನಗರದಲ್ಲಿ ಸತ್ತರೆ, ಅವರನ್ನು ನಾಯಿಗಳು ತಿನ್ನುತ್ತವೆ.
ಯಾರಾದರೂ ತೋಟಗಳಲ್ಲಿ ಸತ್ತರೆ, ಅವರನ್ನು ಪಕ್ಷಿಗಳು
ಕಿತ್ತುತಿನ್ನುತ್ತವೆ ಎನ್ನುತ್ತಾನೆ’’’ ಎಂದು ಹೇಳಿದನು.
25ಅಹಾಬನು ಮಾಡಿದಷ್ಟು ಪಾಪಗಳನ್ನು ಇಲ್ಲವೆ ಕೆಟ್ಟ
ಕಾರ್ಯಗಳನ್ನು ಮಾಡಿದ ಮನುಷ್ಯರು ಬೇರೆ ಯಾರೂ
ಇಲ್ಲ. ಅವನು ಆ ಕಾರ್ಯಗಳನ್ನು ಮಾಡುವುದಕ್ಕೆ ಅವನ
ಪತ್ನಿಯಾದ ಈಜೆಬೆಲಳು ಅವನನ್ನು ಒತ್ತಾಯ ಪಡಿಸಿ
ದಳು. 26ಅಹಾಬನು ಬಹು ಕೆಟ್ಟ ಪಾಪವನ್ನು ಮಾಡಿದನು
ಮತ್ತು ವಿಗ್ರಹಗಳನ್ನು ಆರಾಧಿಸಿದನು. ಅಮೋರ್ಯರು
ಇಂತಹ ಕಾರ್ಯವನ್ನೇ ಮಾಡಿದ್ದರು. ಯೆಹೋವನು
ಅವರನ್ನು ಅವರ ನಾಡಿನಿಂದ ಓಡಿಸಿದನು ಮತ್ತು ಅದನ್ನು
ಇಸ್ರೇಲಿನ ಜನರಿಗೆ ದಯಪಾಲಿಸಿದನು.
27ಎಲೀಯನು ಮಾತನಾಡಿದ ನಂತರ ಅಹಾಬನು
ಬಹಳ ಶೋಕತಪ್ತನಾದನು. ಅವನು ದುಃಖದಿಂದ ತನ್ನ
ಬಟ್ಟೆಗಳನ್ನು ಹರಿದುಕೊಂಡು ಗೋಣಿತಟ್ಟನ್ನು ಸುತ್ತಿ
ಕೊಂಡನು. ಅವನು ಊಟಮಾಡದೆ ಹಾಗೆಯೇ ಮಲಗಿ
ಕೊಂಡನು; ದುಃಖದಿಂದ ತಳಮಳಗೊಂಡನು.
28ಯೆಹೋವನು ಪ್ರವಾದಿಯಾದ ಎಲೀಯನಿಗೆ,
29‘‘ಅಹಾಬನು ನನ್ನ ಎದುರಿನಲ್ಲಿ ತನ್ನನ್ನು ತಗ್ಗಿಸಿ
ಕೊಂಡಿರುವುದನ್ನು ನಾನು ನೋಡುತ್ತಿದ್ದೇನೆ. ಆದ್ದರಿಂದ
ಅವನ ಜೀವಮಾನಕಾಲದಲ್ಲಿ ಅವನಿಗೆ ಕೇಡಾಗದಂತೆ
ಮಾಡುವೆನು. ಅವನ ಮಗ ರಾಜನಾಗುವವರೆಗೆ ನಾನು
ಕಾಯುತ್ತೇನೆ. ನಂತರ ಅಹಾಬನ ಕುಟುಂಬಕ್ಕೆ ಕೇಡನ್ನು
ಬರಮಾಡುತ್ತೇನೆ’’ ಎಂದು ಹೇಳಿದನು.

### ಅಹಾಬನಿಗೆ ಮೀಕಾಯೆಹುವಿನ ಎಚ್ಚರಿಕೆ

22 ಮುಂದಿನ ಎರಡು ವರ್ಷಗಳಲ್ಲಿ, ಇಸ್ರೇಲ್
ಮತ್ತು ಅರಾಮ್ಯರ ಮಧ್ಯೆ ಶಾಂತಿಯಿತ್ತು.
2ಮೂರನೆಯ ವರ್ಷದಲ್ಲಿ ಯೆಹೂದದ ರಾಜನಾದ
ಯೆಹೋಷಾಫಾಟನು ಇಸ್ರೇಲಿನ ರಾಜನಾದ ಅಹಾಬ
ನನ್ನು ಭೇಟಿ ಮಾಡಲು ಹೋದನು.
3ಆ ಸಮಯದಲ್ಲಿ, ಅಹಾಬನು ತನ್ನ ಅಧಿಕಾರಿಗಳಿಗೆ,
‘‘ಅರಾಮ್ಯರ ರಾಜನು ಗಿಲ್ಯಾದಿನ ರಾಮೋತ್ ಪಟ್ಟಣ
ವನ್ನು ನಮ್ಮಿಂದ ತೆಗೆದುಕೊಂಡದ್ದನ್ನು ಜ್ಞಾಪಿಸಿಕೊಳ್ಳಿರಿ?
ರಾಮೋತನ್ನು ಹಿಂದಕ್ಕೆ ಪಡೆಯಲು ನಾವು ಏನನ್ನೂ
ಮಾಡಲಿಲ್ಲವೇಕೆ? ಅದು ನಮ್ಮ ಪಟ್ಟಣ’’ ಎಂದು ಹೇಳಿ
ದನು. 4ಆದ್ದರಿಂದ ಅಹಾಬನು ರಾಜನಾದ ಯೆಹೋಷಾ
ಫಾಟನನ್ನು, ‘‘ಅರಾಮ್ಯರ ವಿರುದ್ಧವಾಗಿ ರಾಮೋತಿನಲ್ಲಿ
ಹೋರಾಟ ಮಾಡುವುದಕ್ಕೆ ನೀನು ನಮ್ಮೊಂದಿಗೆ ಸೇರಿ
ಕೊಳ್ಳುವೆಯಾ?’’ ಎಂದು ಕೇಳಿದನು.

ಯೆಹೋಷಾಫಾಟನು, ‘‘ಆಗಲಿ, ನಾನು ನಿನ್ನ ಜೊತೆ
ಸೇರಿಕೊಳ್ಳುತ್ತೇನೆ. ನನ್ನ ಸೈನ್ಯಗಳು ಮತ್ತು ನನ್ನ ಕುದುರೆ
ಗಳು ನಿನ್ನ ಸೈನ್ಯದ ಜೊತೆ ಸೇರಲು ಸಿದ್ಧವಾಗಿವೆ. 5ಆದರೆ
ಯೆಹೋವನ ಸಲಹೆಯನ್ನು ನಾವು ಮೊದಲು ಕೇಳ
ಬೇಕಾಗಿದೆ’’ ಎಂದನು.
6ಅಹಾಬನು ಪ್ರವಾದಿಗಳ ಸಭೆಯೊಂದನ್ನು ಕರೆದನು.
ಆ ಸಮಯದಲ್ಲಿ ನಾನೂರುಮಂದಿ ಪ್ರವಾದಿಗಳಿದ್ದರು.
ಅಹಾಬನು ಪ್ರವಾದಿಗಳನ್ನು, ‘‘ಅರಾಮ್ಯರ ಸೇನೆಯ
ವಿರುದ್ಧ ಹೋರಾಡಲು ನಾನು ರಾಮೋತಿಗೆ ಹೋಗ
ಬೇಕೇ? ಅಥವಾ ನಾನು ಬೇರೊಂದು ಸಮಯಕ್ಕಾಗಿ

ಕಾಯಬೇಕೇ?'' ಎಂದು ಕೇಳಿದನು. ಪ್ರವಾದಿಗಳು,
''ನೀನು ಹೋಗಿ ಯುದ್ಧಮಾಡು. ನೀನು ಗೆಲ್ಲುವಂತೆ
ಯೆಹೋವನು ಮಾಡುವನು'' ಎಂದು ಹೇಳಿದರು.
7ಆದರೆ ಯೆಹೋಷಾಫಾಟನು, ''ಯೆಹೋವನ
ಪ್ರವಾದಿಗಳು ಇಲ್ಲಿ ಬೇರೆ ಯಾರಾದರೂ ಇದ್ದಾರೆಯೇ?
ಯಾರಾದರೂ ಇದ್ದರೆ, ದೇವರು ಏನು ಹೇಳುತ್ತಾ
ನೆಂಬುದನ್ನು ನಾವು ಅವರನ್ನು ಕೇಳೋಣ'' ಎಂದು
ಹೇಳಿದನು.
8ರಾಜನಾದ ಅಹಾಬನು, ''ಬೇರೊಬ್ಬ ಪ್ರವಾದಿಯು
ಇಲ್ಲಿದ್ದಾನೆ. ಅವನು ಇಮ್ಲನ ಮಗನಾದ ಮೀಕಾಯೆಹು
ಎಂಬ ಹೆಸರಿನವನು. ಆದರೆ ನಾನು ಅವನನ್ನು ದ್ವೇಷಿಸು
ತ್ತೇನೆ. ಯೆಹೋವನ ಪ್ರತಿನಿಧಿಯಾಗಿ ಅವನು ಮಾತ
ನಾಡುವಾಗ ಅವನೆಂದೂ ನನಗೆ ಒಳ್ಳೆಯವುಗಳನ್ನು
ಪ್ರವಾದಿಸುವುದಿಲ್ಲ. ಅವನು ಯಾವಾಗಲೂ ನನಗೆ
ಕೆಟ್ಟವುಗಳನ್ನೇ ಪ್ರವಾದಿಸುತ್ತಾನೆ'' ಎಂದು ಉತ್ತರಿಸಿದನು.
ಯೆಹೋಷಾಫಾಟನು, ''ರಾಜನಾದ ಅಹಾಬನೇ,
ನೀನು ಆ ಸಂಗತಿಗಳನ್ನು ಹೇಳಲೇಬಾರದು!'' ಎಂದು
ಹೇಳಿದನು. 9ರಾಜನಾದ ಅಹಾಬನು ತನ್ನ ಅಧಿಕಾರಿ
ಗಳಲ್ಲಿ ಒಬ್ಬನಿಗೆ, ''ಹೋಗಿ, ಮೀಕಾಯೆಹುವನ್ನು ಕಂಡು
ಹಿಡಿ'' ಎಂದು ತಿಳಿಸಿದನು.
10ಆ ಸಮಯದಲ್ಲಿ ಈ ಇಬ್ಬರು ರಾಜರು ತಮ್ಮ ರಾಜ
ವಸ್ತ್ರಗಳನ್ನು ಧರಿಸಿದ್ದರು. ಸಮಾರ್ಯ ಪಟ್ಟಣದ ಹೆಬ್ಬಾಗಿ
ಲಿನ ಬಳಿಯಲ್ಲಿದ್ದ ಸಿಂಹಾಸನಗಳ ಮೇಲೆ ಅವರು ಕುಳಿತಿ
ದ್ದರು. ಅವರ ಎದುರಿನಲ್ಲಿ ಪ್ರವಾದಿಗಳೆಲ್ಲರೂ ನಿಂತಿ
ದ್ದರು. ಪ್ರವಾದಿಗಳು ಪ್ರವಾದಿಸುತ್ತಿದ್ದರು. 11ಪ್ರವಾದಿ
ಗಳಲ್ಲಿ ಚಿದ್ಕೀಯ ಎಂಬ ಹೆಸರಿನವನೊಬ್ಬನಿದ್ದನು.
ಅವನು ಕೆನಾನನ ಮಗ. ಚಿದ್ಕೀಯನು ಕೆಲವು ಕಬ್ಬಿಣದ
ಕೊಂಬುಗಳನ್ನು* ಮಾಡಿಸಿದ್ದನು. ಆಗ ಅವನು ಅಹಾಬ
ನಿಗೆ, ''ಯೆಹೋವನು ಇಂತೆನ್ನುವನು: 'ಅರಾಮ್ಯರ
ಸೈನ್ಯದ ವಿರುದ್ಧ ಹೋರಾಡಲು ನೀನು ಈ ಕೊಂಬು
ಗಳನ್ನು ಬಳಸುವೆ. ನೀನು ಅವರನ್ನು ಸೋಲಿಸುವೆ ಮತ್ತು
ನಾಶಗೊಳಿಸುವೆ''' ಎಂದು ಹೇಳಿದನು. 12ಇತರ ಪ್ರವಾದಿ
ಗಳೆಲ್ಲರೂ ಚಿದ್ಕೀಯನ ಮಾತನ್ನು ಬೆಂಬಲಿಸಿದರು.
ಪ್ರವಾದಿಯು, ''ನಿನ್ನ ಸೈನ್ಯವು ಈಗ ಹೊರಡಲಿ. ಅವರು
ರಾಮೋತಿನಲ್ಲಿ ಅರಾಮ್ಯರ ಸೈನ್ಯದ ವಿರುದ್ಧ ಹೋರಾಡ
ಲೇಬೇಕು. ನೀನು ಹೋರಾಟದಲ್ಲಿ ಜಯಗಳಿಸುವೆ.
ನೀನು ಗೆಲ್ಲುವಂತೆ ಯೆಹೋವನು ಮಾಡುತ್ತಾನೆ''
ಎಂದನು.
13ಈ ಕಾರ್ಯಗಳು ನಡೆಯುತ್ತಿರುವಾಗ, ಮೀಕಾಯೆ
ಹುವನ್ನು ಕಂಡುಹಿಡಿಯಲು ಅಧಿಕಾರಿಯೊಬ್ಬನು
ಹೋದನು. ಅಧಿಕಾರಿಯು ಮೀಕಾಯೆಹುವನ್ನು ಕಂಡು
ಹಿಡಿದು, ಅವನಿಗೆ, ''ರಾಜನಿಗೆ ಶುಭವಾಗುವುದೆಂದು
ಪ್ರವಾದಿಗಳೆಲ್ಲರೂ ಹೇಳಿದ್ದಾರೆ. ಆದ್ದರಿಂದ ಅವರು
ಹೇಳಿದಂತೆಯೆ ನೀನೂ ಹೇಳುವುದು ನಿನಗೇ
ಒಳ್ಳೆಯದು'' ಎಂದು ಹೇಳಿದನು.
14ಆದರೆ ಮೀಕಾಯೆಹುವು, ''ಇಲ್ಲ! ಯೆಹೋವ
ನಾಣೆ, ಆತನು ತಿಳಿಸುವುದನ್ನೇ ನಾನು ಹೇಳುತ್ತೇನೆ''
ಎಂದು ಉತ್ತರಿಸಿದನು.
15ನಂತರ ರಾಜನಾದ ಅಹಾಬನ ಎದುರಿನಲ್ಲಿ
ಮೀಕಾಯೆಹು ನಿಂತುಕೊಂಡನು. ರಾಜನು ಅವನನ್ನು
''ಮೀಕಾಯೆಹುವೇ, ರಾಜನಾದ ಯೆಹೋಷಾಫಾಟನು
ಮತ್ತು ನಾನು ನಮ್ಮ ಸೈನ್ಯಗಳನ್ನು ಒಟ್ಟುಗೂಡಿಸ
ಬಹುದೇ? ಅರಾಮ್ಯರ ಸೇನೆಯ ವಿರುದ್ಧ ಹೋರಾಡಲು
ರಾಮೋತಿಗೆ ನಾವೀಗ ಹೋಗಬೇಕೇ?'' ಎಂದು
ಕೇಳಿದನು.
ಮೀಕಾಯೆಹು, ''ಆಗಲಿ, ಈಗ ನೀವು ಹೋಗಿ, ಅವರ
ವಿರುದ್ಧ ಯುದ್ಧಮಾಡಿ. ಯೆಹೋವನು ನಿಮಗೆ ಜಯ
ವನ್ನು ಕೊಡುತ್ತಾನೆ'' ಎಂದನು. 16ಆದರೆ ಅಹಾಬನು,
''ಯೆಹೋವನ ಶಕ್ತಿಯಿಂದ ನೀನು ಮಾತನಾಡುತ್ತಿಲ್ಲ.
ನೀನು ನಿನ್ನ ಸ್ವಂತ ಮಾತುಗಳನ್ನು ಹೇಳುತ್ತಿರುವೆ. ನನಗೆ
ನೀನು ನಿಜವನ್ನು ಹೇಳು! ನಾನು ನಿನಗೆ ಎಷ್ಟು ಸಲ
ಹೇಳಬೇಕು? ಯೆಹೋವನು ತಿಳಿಸುವುದನ್ನೇ ನನಗೆ
ಹೇಳು!'' ಎಂದು ಕೇಳಿದನು.
17ಮೀಕಾಯೆಹು, ''ಮುಂದೆ ಸಂಭವಿಸುವುದು ನನಗೆ
ಕಾಣುತ್ತಿದೆ. ಇಸ್ರೇಲಿನ ಸೈನ್ಯವು ಬೆಟ್ಟಗಳ ಮೇಲೆ
ಚೆಲ್ಲಾಪಿಲ್ಲಿಯಾಗಿ ಕುರುಬನಿಲ್ಲದ ಕುರಿಗಳಂತಾಗಿದೆ.
ಯೆಹೋವನು ಹೇಳುವುದು ಇದನ್ನೇ, 'ಈ ಜನರಿಗೆ
ನಾಯಕನಿಲ್ಲ. ಅವರು ಯುದ್ಧಮಾಡದೆ, ಮನೆಗೆ ಹೋಗ
ಬೇಕು''' ಎಂದು ಹೇಳಿದನು.
18ಆಗ ಅಹಾಬನು ಯೆಹೋಷಾಫಾಟನಿಗೆ, ''ನೋಡಿ
ದೆಯಾ! ನಾನು ನಿನಗೆ ಹೇಳಿದೆನಲ್ಲಾ! ಈ ಪ್ರವಾದಿಯು
ಎಂದೂ ನನ್ನ ಬಗ್ಗೆ ಒಳ್ಳೆಯದೇನನ್ನೂ ಹೇಳುವುದಿಲ್ಲ.
ನಾನು ಕೇಳಬಾರದ ಸಂಗತಿಗಳನ್ನು ಅವನು ಯಾವಾ
ಗಲೂ ನನಗೆ ಹೇಳುತ್ತಾನೆ'' ಎಂದು ಹೇಳಿದನು.
19ಆದರೆ ಮೀಕಾಯೆಹು ಯೆಹೋವನಿಗಾಗಿ ಮಾತ
ನಾಡುತ್ತಲೇ ಇದ್ದನು. ಮೀಕಾಯೆಹು, ''ಕೇಳಿರಿ! ಈ
ಮಾತುಗಳನ್ನು ಯೆಹೋವನು ತಿಳಿಸುತ್ತಾನೆ! ಯೆಹೋ
ವನು ಪರಲೋಕದಲ್ಲಿ ತನ್ನ ಸಿಂಹಾಸನದ ಮೇಲೆ
ಕುಳಿತಿರುವುದನ್ನು ನಾನು ನೋಡಿದೆನು. ಆತನ ಎಲ್ಲಾ
ದೂತರು ಆತನ ಎಡಬಲಗಳಲ್ಲಿ ನಿಂತಿದ್ದರು. 20ಯೆಹೋ
ವನು ಅವರಿಗೆ, 'ನಿಮ್ಮಲ್ಲಿ ಯಾರಾದರೂ ರಾಜನಾದ
ಅಹಾಬನನ್ನು ಪ್ರೇರೇಪಿಸುವಿರಾ? ಅವನು ಅರಾಮ್ಯರ
ಸೇನೆಯ ವಿರುದ್ಧ ಹೋರಾಡಲು ರಾಮೋತಿಗೆ

---

**ಕಬ್ಬಿಣದ ಕೊಂಬುಗಳು** ಉನ್ನತ ಶೌರ್ಯಕ್ಕೆ ಇವು ಸಂಕೇತಗಳು.

ಹೋಗಬೇಕೆಂದು ನಾನು ಅಪೇಕ್ಷೆ ಪಟ್ಟಿದ್ದೇನೆ. ಅಲ್ಲಿ
ಅವನು ಕೊಲ್ಲಲ್ಪಡುವನು' ಎಂದು ಹೇಳಿದನು. ತಾವು
ಏನು ಮಾಡಬೇಕೆಂಬುದರ ಬಗ್ಗೆ ದೂತರಲ್ಲಿ ಒಮ್ಮತದ
ಅಭಿಪ್ರಾಯವುಂಟಾಗಲಿಲ್ಲ. 21ಆಗ ಒಬ್ಬ ದೂತನು
ಯೆಹೋವನ ಬಳಿಗೆ ಹೋಗಿ, 'ನಾನು ಅವನನ್ನು
ಪ್ರೇರೇಪಿಸುತ್ತೇನೆ' ಎಂದನು. 22ಯೆಹೋವನು, 'ರಾಜ
ನಾದ ಅಹಾಬನನ್ನು ನೀನು ಹೇಗೆ ಪ್ರೇರೇಪಿಸುವೆ?''
ಎಂದು ಉತ್ತರಿಸಿದಾಗ, ದೂತನು, 'ಅಹಾಬನ ಎಲ್ಲಾ
ಪ್ರವಾದಿಗಳು ಗಲಿಬಿಲಿ ಗೊಳ್ಳುವಂತೆ ಮಾಡುತ್ತೇನೆ.
ರಾಜನಾದ ಅಹಾಬನಿಗೆ ಪ್ರವಾದಿಗಳು ಸುಳ್ಳುಹೇಳುವಂತೆ
ನಾನು ಮಾಡುತ್ತೇನೆ. ಪ್ರವಾದಿಗಳ ಸಂದೇಶವೆಲ್ಲವೂ
ಸುಳ್ಳಾಗಿರುವುದು' ಎಂದನು. ಆದ್ದರಿಂದ ಯೆಹೋವನು,
'ಸರಿ, ಹೋಗಿ ರಾಜನಾದ ಅಹಾಬನನ್ನು ಪ್ರೇರೇಪಿಸು.
ನೀನು ಸಫಲನಾಗುವೆ''' ಎಂದು ಹೇಳಿದನು. 23ಮೀಕಾ
ಯೆಹು ಹೀಗೆ ಹೇಳಿದ ಮೇಲೆ, ''ಇಲ್ಲಿ ನಡೆದದ್ದೂ ಇದೇ.
ನಿನ್ನ ಪ್ರವಾದಿಗಳೇ ನಿನಗೆ ಸುಳ್ಳುಹೇಳುವಂತೆ ಯೆಹೋ
ವನು ಮಾಡಿದ್ದಾನೆ. ನಿನಗೆ ಮಹಾಕೇಡು ಬರಲೆಂದು
ಯೆಹೋವನು ತಾನೇ ತೀರ್ಮಾನಿಸಿದ್ದಾನೆ'' ಎಂದು
ಹೇಳಿದನು.

24ಆಗ ಪ್ರವಾದಿಯಾದ ಚಿದ್ಕೀಯನು ಮೀಕಾಯೆಹು
ವಿನ ಹತ್ತಿರಕ್ಕೆ ಹೋಗಿ ಅವನ ಮುಖದ ಮೇಲೆ ಹೊಡೆದು,
''ಯೆಹೋವನ ಆತ್ಮವು ನನ್ನನ್ನು ಬಿಟ್ಟುಹೋಗಿದೆ
ಎಂಬುದನ್ನೂ ಈಗ ನಿನ್ನ ಮೂಲಕ ಮಾತನಾಡುತ್ತಿದ್ದಾನೆ
ಎಂಬುದನ್ನೂ ನೀನು ನಿಜವಾಗಿಯೂ ನಂಬುವೆಯಾ?''
ಎಂದು ಕೇಳಿದನು.

25ಮೀಕಾಯೆಹು, ''ಕೇಡು ಬೇಗನೆ ಬರಲಿದೆ. ಆಗ
ನೀನು ಹೋಗಿ ಒಂದು ಚಿಕ್ಕ ಕೊಠಡಿಯಲ್ಲಿ ಅಡಗಿ
ಕೊಳ್ಳುವೆ. ನಾನು ಸತ್ಯವನ್ನೇ ನುಡಿದೆನೆಂದು ಆಗ ನಿನಗೆ
ತಿಳಿಯುತ್ತದೆ!'' ಎಂದನು.

26ಆಗ ರಾಜನಾದ ಅಹಾಬನು ಮೀಕಾಯೆಹುವನ್ನು
ಬಂಧಿಸುವಂತೆ ತನ್ನ ಅಧಿಕಾರಿಯೊಬ್ಬನಿಗೆ ಅಜ್ಞೆ
ಮಾಡಿದನು. ರಾಜನಾದ ಅಹಾಬನು, ''ಅವನನ್ನು
ಬಂಧಿಸಿ, ನಗರಾಧಿಕಾರಿಯಾದ ಆಮೋನ ಮತ್ತು ರಾಜ
ಪುತ್ರನಾದ ಯೋವಾಷನ ಬಳಿಗೆ ತೆಗೆದುಕೊಂಡು
ಹೋಗಿ. 27ಮೀಕಾಯೆಹುವನ್ನು ಸೆರೆಮನೆಯಲ್ಲಿಡ
ಬೇಕೆಂದು ಅವರಿಗೆ ತಿಳಿಸಿ. ಅವನಿಗೆ ತಿನ್ನಲು ಸ್ವಲ್ಪ ರೊಟ್ಟಿ
ಮತ್ತು ಕುಡಿಯಲು ಸ್ವಲ್ಪ ನೀರನ್ನು ಮಾತ್ರ ಕೊಡಿ. ನಾನು
ಯುದ್ಧದಿಂದ ಮನೆಗೆ ಹಿಂದಿರುಗುವವರೆಗೆ ಅವನನ್ನು
ಅಲ್ಲಿಯೇ ಇಡಿ'' ಎಂದು ಹೇಳಿದನು.

28ಮೀಕಾಯೆಹು ಗಟ್ಟಿಯಾದ ಧ್ವನಿಯಲ್ಲಿ, ''ನಾನು
ಏನು ಹೇಳುತ್ತೇನೆಂಬುದನ್ನು ಜನರೆಲ್ಲರೂ ಕೇಳಿರಿ! ರಾಜ
ನಾದ ಅಹಾಬನೇ, ನೀನು ಈ ಹೋರಾಟದಿಂದ ಜೀವ
ಸಹಿತ ಮನೆಗೆ ಬಂದರೆ, ಯೆಹೋವನು ನನ್ನ ಮೂಲಕ
ಮಾತನಾಡಿಲ್ಲ'' ಎಂದು ಹೇಳಿದನು. 29ನಂತರ ರಾಜ
ನಾದ ಅಹಾಬನು ಮತ್ತು ರಾಜನಾದ ಯೆಹೋಷಾ
ಫಾಟನು ಅರಾಮ್ಯರ ಸೇನೆಯ ವಿರುದ್ಧ ಹೋರಾಡಲು
ರಾಮೋತಿಗೆ ಹೋದರು. ಅದು ಗಿಲ್ಯಾದಿನ ಪ್ರದೇಶ
ವೆಂಬಲ್ಲಿ ನಡೆಯಿತು. 30ಅಹಾಬನು ಯೆಹೋಷಾಫಾಟ
ನಿಗೆ, ''ನಾವು ಹೋರಾಟಕ್ಕೆ ಸಿದ್ಧತೆಗಳನ್ನು ಮಾಡೋಣ.
ನೋಡುವುದಕ್ಕೆ ರಾಜನಲ್ಲವೆಂದು ತೋರುವಂತಹ
ವಸ್ತ್ರಗಳನ್ನು ನಾನು ಧರಿಸಿಕೊಳ್ಳುತ್ತೇನೆ. ಆದರೆ ನೀನು
ರಾಜನಂತೆ ತೋರುವ ನಿನ್ನ ವಿಶೇಷ ವಸ್ತ್ರಗಳನ್ನು
ಧರಿಸಿಕೊ'' ಎಂದನು. ಇಸ್ರೇಲಿನ ರಾಜನು, ತಾನು ರಾಜ
ನಲ್ಲವೆಂದು ತೋರುವಂತಹ ವಸ್ತ್ರಗಳನ್ನು ಧರಿಸಿಕೊಂಡು
ಹೋರಾಟವನ್ನು ಆರಂಭಿಸಿದನು.

31ಅರಾಮ್ಯರ ರಾಜನ ಬಳಿ ಮೂವತ್ತೆರಡು ರಥಬಲದ
ಅಧಿಪತಿಗಳಿದ್ದರು. ಆ ರಾಜನು ಇಸ್ರೇಲಿನ ರಾಜನನ್ನು
ಕಂಡುಹಿಡಿಯುವಂತೆ ಈ ಮೂವತ್ತೆರಡು ರಥಬಲದ
ಅಧಿಪತಿಗಳಿಗೆ ಆಜ್ಞಾಪಿಸಿದ್ದನು. ಅರಾಮ್ಯರ ರಾಜನು,
ಇಸ್ರೇಲಿನ ರಾಜನನ್ನು ಕೊಂದುಹಾಕುವಂತೆ ಈ ಅಧಿಕಾರಿ
ಗಳಿಗೆ ಆಜ್ಞಾಪಿಸಿದ್ದನು; 32ಹೋರಾಟದ ಸಂದರ್ಭದಲ್ಲಿ
ರಾಜನಾದ ಯೆಹೋಷಾಫಾಟನನ್ನು ಈ ಅಧಿಪತಿಗಳು
ನೋಡಿದರು. ಆ ಅಧಿಕಾರಿಗಳು ಅವನನ್ನು ಇಸ್ರೇ
ಲಿನ ರಾಜನೆಂದು ತಿಳಿದು ಅವನನ್ನು ಕೊಲ್ಲುವು
ದಕ್ಕೆ ಅವರು ಹೋದರು. ಯೆಹೋಷಾಫಾಟನು
ಕೂಗಿಕೊಳ್ಳಲಾರಂಭಿಸಿದನು. 33ಅವನು ರಾಜನಾದ
ಅಹಾಬನಲ್ಲವೆಂಬುದನ್ನು ಆ ಅಧಿಕಾರಿಗಳು ತಿಳಿದು
ಅವನನ್ನು ಕೊಲ್ಲಲಿಲ್ಲ. 34ಆದರೆ ಒಬ್ಬ ಸೈನಿಕನು
ಯಾರಿಗೂ ಗುರಿಯಿಡದೆ ಒಂದು ಬಾಣವನ್ನು ಗಾಳಿ
ಯಲ್ಲಿ ಹೊಡೆದನು. ಆದರೆ ಅವನ ಬಾಣವು ಇಸ್ರೇಲಿನ
ರಾಜನಾದ ಅಹಾಬನಿಗೆ ಬಡಿಯಿತು. ಆ ಬಾಣವು ರಾಜನ
ದೇಹದ ಕವಚದ ಸಣ್ಣ ಸಂಧಿಯಲ್ಲಿ ತಾಕಿತು. ರಾಜನಾದ
ಅಹಾಬನು ತನ್ನ ರಥದ ಸಾರಥಿಗೆ, ''ಒಂದು ಬಾಣವು
ನನಗೆ ತಾಕಿತು! ರಥವನ್ನು ಈ ಪ್ರದೇಶದಿಂದ ಹೊರಗೆ
ಓಡಿಸು. ನಾವು ಯುದ್ಧದಿಂದ ಹೊರಟು ಹೋಗಬೇಕಾ
ಗಿದೆ'' ಎಂದು ಹೇಳಿದನು. 35ಸೈನಿಕರು ಹೋರಾಡುತ್ತಲೇ
ಇದ್ದರು. ರಾಜನಾದ ಅಹಾಬನು ರಥದಲ್ಲಿಯೇ ಇದ್ದನು.
ಅವನು ರಥದ ಒಂದು ಪಕ್ಕಕ್ಕೆ ಒರಗಿಕೊಂಡು ನಿಂತಿದ್ದನು.
ಅವನು ಅರಾಮ್ಯರ ಸೇನೆಯ ಕಡೆಗೆ ನೋಡುತ್ತಲೇ
ಇದ್ದನು. ಅವನ ದೇಹದಿಂದ ಹರಿದ ರಕ್ತವು, ರಥದ ತಳ
ದಲ್ಲಿ ಮಡುಗಟ್ಟಿತು. ಸಾಯಂಕಾಲವಾದ ಮೇಲೆ ರಾಜನು
ಸತ್ತುಹೋದನು. 36ಸೂರ್ಯನು ಮುಳುಗುತ್ತಿರಲು,
ಇಸ್ರೇಲಿನ ಸೈನ್ಯದ ಪ್ರತಿಯೊಬ್ಬನು ತನ್ನ ಊರಿಗೂ ತನ್ನ
ನಾಡಿಗೂ ಹೋಗಬೇಕು!'' ಎಂಬ ಕೂಗು ಸೈನ್ಯದಲ್ಲೆಲ್ಲಾ

(ಪಾಳೆಯದಲ್ಲಿ) ಹಬ್ಬಿತು. 37 ರಾಜನಾದ ಅಹಾಬನು ಈ
ರೀತಿಯಲ್ಲಿ ಸತ್ತುಹೋದನು. ಅವನ ದೇಹವನ್ನು ಕೆಲವು
ಜನರು ಸಮಾರ್ಯಕ್ಕೆ ತೆಗೆದುಕೊಂಡು ಹೋದರು.
ಅವರು ಅವನನ್ನು ಅಲ್ಲಿ ಸಮಾಧಿ ಮಾಡಿದರು. 38 ಆ
ಜನರು ಅಹಾಬನ ರಥವನ್ನು ಸಮಾರ್ಯದ ಕೊಳದ
ನೀರಿನಲ್ಲಿ ತೊಳೆದರು. ರಥದಲ್ಲಿದ್ದ ರಾಜನಾದ ಅಹಾಬನ
ರಕ್ತವನ್ನು ನಾಯಿಗಳು ನೆಕ್ಕಿದವು. ದೇವದಾಸಿಯರು ಆ
ಕೊಳದ ನೀರನ್ನು ಸ್ನಾನಕ್ಕೆ ಉಪಯೋಗಿಸುತ್ತಿದ್ದರು.
ಯೆಹೋವನು ಹೇಳಿದ್ದ ರೀತಿಯಲ್ಲಿಯೇ ಈ ಸಂಗತಿಗಳು
ಸಂಭವಿಸಿದವು.

39 ರಾಜನಾದ ಅಹಾಬನು ತನ್ನ ಆಳ್ವಿಕೆಯ ಕಾಲದಲ್ಲಿ
ಮಾಡಿದ ಸಂಗತಿಗಳನ್ನೆಲ್ಲಾ ‘‘ಇಸ್ರೇಲಿನ ರಾಜರುಗಳ
ಇತಿಹಾಸ’’ ಪುಸ್ತಕದಲ್ಲಿ ಬರೆದಿದ್ದಾರೆ. ರಾಜನು ತನ್ನ
ಅರಮನೆಯನ್ನು ಮತ್ತಷ್ಟು ಸುಂದರವಾಗಿ ಕಾಣುವಂತೆ
ಮಾಡಲು ಬಳಸಿದ ದಂತದ ಕುರಿತಾಗಿಯೂ ಆ ಪುಸ್ತಕವು
ತಿಳಿಸುತ್ತದೆ. ರಾಜನು ನಿರ್ಮಿಸಿದ ನಗರಗಳ ಬಗ್ಗೆಯೂ
ಆ ಪುಸ್ತಕವು ತಿಳಿಸುತ್ತದೆ. 40 ಅಹಾಬನು ಸತ್ತಾಗ ಅವನನ್ನು
ಅವನ ಪೂರ್ವಿಕರೊಡನೆ ಸಮಾಧಿ ಮಾಡಿದರು. ಅವನ
ನಂತರ ಅವನ ಮಗನಾದ ಅಹಜ್ಯನು ರಾಜನಾದನು.

### ಯೆಹೂದದ ರಾಜನಾದ ಯೆಹೋಷಾಫಾಟ

41 ಅಹಾಬನು ಇಸ್ರೇಲಿನ ರಾಜನಾಗಿದ್ದ ನಾಲ್ಕನೆಯ
ವರ್ಷದಲ್ಲಿ ಯೆಹೋಷಾಫಾಟನು ಯೆಹೂದದ ರಾಜ
ನಾದನು. ಯೆಹೋಷಾಫಾಟನು ಆಸನ ಮಗ.
42 ಯೆಹೋಷಾಫಾಟನು ರಾಜನಾದಾಗ ಅವನಿಗೆ ಮೂವ
ತ್ತೈದು ವರ್ಷ ವಯಸ್ಸಾಗಿತ್ತು. ಯೆಹೋಷಾಫಾಟನು
ಜೆರುಸಲೇಮಿನಲ್ಲಿ ಇಪ್ಪತ್ತೈದು ವರ್ಷ ಆಳಿದನು.
ಯೆಹೋಷಾಫಾಟನ ತಾಯಿಯು ಅಜೂಬಳೆಂಬ ಹೆಸರಿ
ನವಳು. ಅಜೂಬಳು ಶಿಲ್ಹಿಯ ಮಗಳು. 43 ಯೆಹೋಷಾ
ಫಾಟನು ಒಳ್ಳೆಯವನಾಗಿದ್ದನು. ಅವನು ತನ್ನ ತಂದೆಯ
ಮಾರ್ಗವನ್ನು ಅನುಸರಿಸಿದನು. ಯೆಹೋವನು ಅಪೇಕ್ಷಿಸಿ
ದವುಗಳಿಗೆಲ್ಲ ಅವನು ವಿಧೇಯನಾಗಿದ್ದನು. ಆದರೆ
ಯೆಹೋಷಾಫಾಟನು ಉನ್ನತಸ್ಥಳಗಳನ್ನು ನಾಶಗೊಳಿಸ
ಲಿಲ್ಲ. ಜನರು ಆ ಸ್ಥಳಗಳಲ್ಲಿ ಯಜ್ಞಗಳನ್ನು ಅರ್ಪಿಸುತ್ತಾ
ಧೂಪಹಾಕುತ್ತಾ ಇದ್ದರು. 44 ಯೆಹೋಷಾಫಾಟನು
ಇಸ್ರೇಲಿನ ರಾಜನೊಂದಿಗೆ ಒಂದು ಶಾಂತಿಒಪ್ಪಂದವನ್ನು
ಮಾಡಿಕೊಂಡನು. 45 ಯೆಹೋಷಾಫಾಟನು ಬಹಳ
ಧೈರ್ಯಶಾಲಿ. ಅವನು ಅನೇಕ ಯುದ್ಧಗಳಲ್ಲಿ ಹೋರಾಡಿ
ದ್ದನು. ಅವನು ಮಾಡಿದ ಕಾರ್ಯಗಳನ್ನೆಲ್ಲಾ
‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ ಪುಸ್ತಕ
ದಲ್ಲಿ ಬರೆಯಲಾಗಿದೆ. 46 ಲೈಂಗಿಕ ಸಂಬಂಧಕ್ಕಾಗಿ ತಮ್ಮ
ದೇಹಗಳನ್ನು ಮಾರಾಟ ಮಾಡುತ್ತಿದ್ದ ಗಂಡಸರನ್ನು
ಮತ್ತು ಹೆಂಗಸರನ್ನು, ಯೆಹೋಷಾಫಾಟನು ದೇಶದಿಂದ
ಹೊರಗಟ್ಟಿದನು. ಅವನ ತಂದೆಯಾದ ಆಸನು ರಾಜ
ನಾಗಿದ್ದ ಕಾಲದಲ್ಲಿ ಆ ಜನರು ಪೂಜಾಸ್ಥಳಗಳಲ್ಲಿ ಸೇವೆ
ಯನ್ನು ಮಾಡುತ್ತಿದ್ದರು. 47 ಈ ಸಮಯದಲ್ಲಿ
ಎದೋಮ್ ದೇಶದಲ್ಲಿ ರಾಜನಿರಲಿಲ್ಲ. ಆ ದೇಶವನ್ನು
ಒಬ್ಬ ರಾಜ್ಯಪಾಲನು ಆಳುತ್ತಿದ್ದನು. ಈ ರಾಜ್ಯಪಾಲನನ್ನು
ಯೆಹೂದದ ರಾಜನು ಆರಿಸಿದ್ದನು.

48 ರಾಜನಾದ ಯೆಹೋಷಾಫಾಟನು ಸರಕು ಸಾಗಿಸುವ
ಹಡಗುಗಳನ್ನು ತಯಾರಿಸಿದನು. ಯೆಹೋಷಾಫಾಟನು
ಓಫೀರ್ ದೇಶದಿಂದ ಬಂಗಾರವನ್ನು ತರುವುದಕ್ಕಾಗಿ ಈ
ಹಡಗುಗಳನ್ನು ಕಳುಹಿಸಿದನು. ಆದರೆ ಆ ಹಡಗುಗಳು
ತಮ್ಮ ಸ್ವಂತ ಬಂದರಾದ ಎಚ್ಯೋನ್ಗೆಬೆರಿಯಲ್ಲಿ ನಾಶ
ವಾದವು. ಅವು ಓಫೀರ್ ದೇಶವನ್ನು ಮುಟ್ಟಲೇ ಇಲ್ಲ.
49 ಇಸ್ರೇಲಿನ ರಾಜನಾದ ಅಹಜ್ಯನು ಯೆಹೋಷಾ
ಫಾಟನಿಗೆ ಸಹಾಯ ಮಾಡಲು ಹೋದನು. ಅಹಜ್ಯನು
ಆ ಹಡಗುಗಳಲ್ಲಿ ತನ್ನ ಸ್ವಂತ ನಾವಿಕರಲ್ಲಿ ಕೆಲವರನ್ನು
ಯೆಹೋಷಾಫಾಟನ ಜನರೊಂದಿಗೆ ಕಳುಹಿಸುತ್ತೇನೆಂದು
ಯೆಹೋಷಾಫಾಟನಿಗೆ ತಿಳಿಸಿದನು. ಆದರೆ ಯೆಹೋಷಾ
ಫಾಟನು ಅಹಜ್ಯನ ಜನರನ್ನು ಸ್ವೀಕರಿಸಲಿಲ್ಲ. 50 ಯೆಹೋ
ಷಾಫಾಟನು ಸತ್ತುಹೋದನು. ಅವನನ್ನು ಅವನ
ಪೂರ್ವಿಕರ ಬಳಿ ದಾವೀದನಗರದಲ್ಲಿ ಸಮಾಧಿ ಮಾಡಿ
ದರು. ನಂತರ ಅವನ ಮಗನಾದ ಯೆಹೋರಾಮನು
ರಾಜನಾದನು.

### ಇಸ್ರೇಲಿನ ರಾಜನಾದ ಅಹಜ್ಯ

51 ಅಹಜ್ಯನು ಅಹಾಬನ ಮಗ. ಯೆಹೋಷಾಫಾಟನು
ಯೆಹೂದದ ರಾಜನಾಗಿದ್ದ ಹದಿನೇಳನೆಯ ವರ್ಷದಲ್ಲಿ
ಅವನು ಇಸ್ರೇಲಿನ ರಾಜನಾದನು. ಅಹಜ್ಯನು ಸಮಾರ್ಯ
ದಲ್ಲಿ ಎರಡು ವರ್ಷ ರಾಜ್ಯವಾಳಿದನು. 52 ಅಹಜ್ಯನು
ಯೆಹೋವನ ವಿರುದ್ಧ ಪಾಪವನ್ನು ಮಾಡಿದನು. ಅವನು
ತನ್ನ ತಂದೆಯಾದ ಅಹಾಬ, ತಾಯಿಯಾದ ಈಜೆಬೆಲ
ಮತ್ತು ನೆಬಾಟನ ಮಗನಾದ ಯಾರೊಬ್ಬಾಮ ಮಾಡಿ
ದಂತಹ ಕಾರ್ಯಗಳನ್ನೇ ಮಾಡಿದನು. ಈ ಆಡಳಿತಗಾರ
ರೆಲ್ಲ ಇಸ್ರೇಲಿನ ಜನರನ್ನು ಮತ್ತಷ್ಟು ಪಾಪಕ್ಕೆ ನಡೆಸಿದರು.
53 ಅಹಜ್ಯನು ತನ್ನ ತಂದೆಯಂತೆಯೇ ಸುಳ್ಳುದೇವರಾದ
ಬಾಳನನ್ನು ಪೂಜಿಸಿ ಅವನ ಸೇವೆ ಮಾಡಿದನು; ಇಸ್ರೇಲಿನ
ದೇವರಾದ ಯೆಹೋವನನ್ನು ರೇಗಿಸಿದನು. ಯೆಹೋ
ವನು ಮೊದಲು ಅಹಜ್ಯನ ತಂದೆಯ ಮೇಲೆ ಕೋಪ
ಗೊಂಡಿದ್ದಂತೆ, ಅಹಜ್ಯನ ಮೇಲೂ ಕೋಪಗೊಂಡನು.

# 2 ರಾಜರುಗಳು

### ಅಹಜ್ಯನಿಗೆ ಒಂದು ಸಂದೇಶ

1 ಅಹಾಬನು ಸತ್ತನಂತರ, ಮೋವಾಬ್ಯರು ಇಸ್ರೇಲಿನ
ಆಳ್ವಿಕೆಗೆ ವಿರೋಧವಾಗಿ ದಂಗೆ ಎದ್ದರು.
2 ಒಂದು ದಿನ, ಅಹಜ್ಯನು ಸಮಾರ್ಯದ ತನ್ನ ಮನೆಯ
ಮಾಳಿಗೆಯ ಮೇಲಿದ್ದನು. ಅಹಜ್ಯನು ಮನೆಯ ಮೇಲಿನ
ಮರದ ಕಂಬಗಳ ಮೂಲಕ ಕೆಳಕ್ಕೆ ಬಿದ್ದನು. ಅವನಿಗೆ
ಬಹಳ ಗಾಯಗಳಾದವು. ಅಹಜ್ಯನು ಸಂದೇಶಕರನ್ನು
ಕರೆದು ಅವರಿಗೆ, ‘‘ಎಕ್ರೋನಿನ ದೇವರಾದ ಬಾಳ್ಜೆ
ಬೂಬನ ಅರ್ಚಕರ ಬಳಿಗೆ ಹೋಗಿ, ನನ್ನ ಗಾಯಗಳು
ಗುಣವಾಗುತ್ತವೆಯೇ ಎಂಬುದನ್ನು ಅವರಿಂದ ತಿಳಿದು
ಕೊಳ್ಳಿ’’ ಎಂದು ಹೇಳಿದನು.

3 ಆದರೆ ಯೆಹೋವನ ದೂತನೊಬ್ಬನು ತಿಷ್ಬೀಯನಾದ
ಎಲೀಯನಿಗೆ, ‘‘ರಾಜನಾದ ಅಹಜ್ಯನು ಸಮಾರ್ಯ
ದಿಂದ ಕೆಲವು ಸಂದೇಶಕರನ್ನು ಕಳುಹಿಸಿದ್ದಾನೆ. ನೀನು
ಹೋಗಿ ಅವರನ್ನು ಭೇಟಿಯಾಗಿ ಅವರಿಗೆ, ‘ಇಸ್ರೇಲಿ
ನಲ್ಲಿಯೂ ಒಬ್ಬ ದೇವರಿದ್ದಾನೆ! ಹೀಗಿರುವಾಗ ನೀವು
ಎಕ್ರೋನಿನ ದೇವರಾದ ಬಾಳ್ಜೆಬೂಬನ ಬಳಿಗೆ ಹೋಗಿ
ಪ್ರಶ್ನೆಗಳನ್ನು ಕೇಳುವುದೇಕೆ? 4 ರಾಜನಾದ ಅಹಜ್ಯನಿಗೆ ಈ
ಸಂಗತಿಗಳನ್ನು ತಿಳಿಸಿ: ಬಾಳ್ಜೆಬೂಬನಿಂದ ಪ್ರಶ್ನೆಗಳನ್ನು
ಕೇಳುವುದಕ್ಕೆ ನೀನು ಸಂದೇಶಕರನ್ನು ಕಳುಹಿಸಿದೆ. ನೀನು
ಈ ಕಾರ್ಯವನ್ನು ಮಾಡಿದುದರಿಂದ, ಯೆಹೋವನು
ಇಂತೆನ್ನುವನು: ‘ನೀನು ನಿನ್ನ ಹಾಸಿಗೆಯಿಂದ ಮೇಲಕ್ಕೇ
ಳುವುದಿಲ್ಲ. ನೀನು ಅಲ್ಲೇ, ಸಾಯುವೆ’ ಎಂದು ತಿಳಿಸು’’
ಎಂಬುದಾಗಿ ಹೇಳಿದನು. ಎಲೀಯನು ಅಹಜ್ಯನ ಸೇವಕ
ರಿಗೆ ಈ ಮಾತುಗಳನ್ನು ಹೇಳಿ ಅಲ್ಲಿಂದ ಹೊರಟು
ಹೋದನು.

5 ಸಂದೇಶಕರು ಅಹಜ್ಯನ ಬಳಿಗೆ ಹಿಂದಿರುಗಿ ಬಂದರು.
ಅಹಜ್ಯನುಸಂದೇಶಕರನ್ನು, ‘‘ನೀವು ಇಷ್ಟು ಬೇಗ ಹಿಂದಕ್ಕೆ
ಬಂದುದೇಕೆ?’’ ಎಂದು ಕೇಳಿದನು.

6 ಸಂದೇಶಕರು ಅಹಜ್ಯನಿಗೆ, ‘‘ಒಬ್ಬನು ನಮ್ಮನ್ನು ಭೇಟಿ
ಯಾಗಿ ‘‘ನಿಮ್ಮನ್ನು ಕಳುಹಿಸಿದ ರಾಜನ ಬಳಿಗೆ ಹಿಂದಿರುಗಿ
ಹೋಗಿ ಯೆಹೋವನು ಹೇಳುವುದನ್ನು ಅವನಿಗೆ ತಿಳಿಸಿ.
ಯೆಹೋವನು ಹೇಳುವುದೇನಂದರೆ: ‘ಇಸ್ರೇಲಿನಲ್ಲಿ
ಒಬ್ಬ ದೇವರಿದ್ದಾನೆ! ಹೀಗಿರುವಾಗ ನೀನು ಎಕ್ರೋನಿನ
ದೇವರಾದ ಬಾಳ್ಜೆಬೂಬನನ್ನು ವಿಚಾರಿಸುವುದಕ್ಕೆ
ಸಂದೇಶಕರನ್ನು ಕಳುಹಿಸಿದುದೇಕೆ? ನೀನು ಈ ಕಾರ್ಯ
ವನ್ನು ಮಾಡಿದ್ದರಿಂದ ನಿನ್ನ ಹಾಸಿಗೆಯಿಂದ ಮೇಲ
ಕ್ಕೇಳುವುದಿಲ್ಲ. ನೀನು ಅಲ್ಲೇ ಸಾಯುವೆ!’’’ ಎಂಬುದಾಗಿ
ಹೇಳಿದರು.
7 ಅಹಜ್ಯನು ಸಂದೇಶಕರನ್ನು, ‘‘ನಿಮ್ಮನ್ನು ಭೇಟಿಮಾಡಿ
ಈ ಮಾತುಗಳನ್ನು ತಿಳಿಸಿದ ಮನುಷ್ಯನು ಹೇಗಿದ್ದನು?’’
ಎಂದು ಕೇಳಿದನು.

8 ಸಂದೇಶಕರು ಅಹಜ್ಯನಿಗೆ, ‘‘ಅವನು ಉಣ್ಣೆಯ
ಮೇಲಂಗಿಯನ್ನು ಧರಿಸಿದ್ದನು ಮತ್ತು ಸೊಂಟಕ್ಕೆ
ಚರ್ಮದ ಪಟ್ಟಿಯನ್ನು ಕಟ್ಟಿಕೊಂಡಿದ್ದನು’’ ಎಂದರು.
ಆಗ ಅಹಜ್ಯನು, ‘‘ಅವನು ತಿಷ್ಬೀಯನಾದ ಎಲೀ
ಯನು’’ ಎಂದು ಹೇಳಿದನು.

### ಅಹಜ್ಯನು ಕಳುಹಿಸಿದ ಬೆಂಕಿಯಿಂದ ಸೇನಾಧಿಪತಿಗಳ ನಾಶನ

9 ಅಹಜ್ಯನು ಎಲೀಯನ ಬಳಿಗೆ ಒಬ್ಬ ಸೇನಾಧಿ
ಪತಿಯನ್ನು ಮತ್ತು ಐವತ್ತು ಮಂದಿ ಜನರನ್ನು ಕಳುಹಿಸಿ
ದನು. ಸೇನಾಧಿಪತಿಯು ಎಲೀಯನ ಬಳಿಗೆ ಹೋದನು.
ಆ ಸಮಯದಲ್ಲಿ ಎಲೀಯನು ಬೆಟ್ಟದ ತುದಿಯಲ್ಲಿ
ಕುಳಿತಿದ್ದನು. ಆ ಸೇನಾಧಿಪತಿಯು ಎಲೀಯನಿಗೆ, ‘‘ದೇವ
ಮನುಷ್ಯನೇ, ರಾಜನು ಹೇಳುತ್ತಾನೆ, ‘ಕೆಳಗಿಳಿದು ಬಾ’
’’ ಎಂದು ಹೇಳಿದನು.
10 ಎಲೀಯನು ಐವತ್ತು ಮಂದಿಯ ಸೇನಾಧಿಪತಿಗೆ,
‘‘ನಾನು ಒಬ್ಬ ದೇವಮನುಷ್ಯನಾದರೆ ಪರಲೋಕದಿಂದ
ಬೆಂಕಿಯು ಕೆಳಗಿಳಿದು ಬಂದು ನಿನ್ನನ್ನೂ ನಿನ್ನ ಐವತ್ತು
ಸೈನಿಕರನ್ನೂ ನಾಶಗೊಳಿಸಲಿ!’’ ಎಂದು ಉತ್ತರಿಸಿದನು.

ಆಗ ಬೆಂಕಿಯು ಪರಲೋಕದಿಂದ ಬಂದು ಆ ಸೇನಾಧಿ
ಪತಿಯನ್ನು ಮತ್ತು ಅವನ ಐವತ್ತು ಮಂದಿ ಸೈನಿಕರನ್ನು
ನಾಶಗೊಳಿಸಿತು.

11 ಅಹಜ್ಯನು ಬೇರೊಬ್ಬ ಸೇನಾಧಿಪತಿಯನ್ನು ಮತ್ತು
ಐವತ್ತು ಜನರನ್ನು ಎಲೀಯನ ಬಳಿಗೆ ಕಳುಹಿಸಿದನು.

ಸೇನಾಧಿಪತಿಯು ಎಲೀಯನಿಗೆ, ''ದೇವಮನುಷ್ಯನೇ, ರಾಜನು ಹೇಳುತ್ತಾನೆ, 'ತ್ವರಿತವಾಗಿ ಕೆಳಗಿಳಿದು ಬಾ!' ''ಎಂದು ಹೇಳಿದನು.

12ಎಲೀಯನು ಸೇನಾಧಿಪತಿಗೆ ಮತ್ತು ಅವನ ಐವತ್ತು ಮಂದಿ ಜನರಿಗೆ, ''ನಾನು ದೇವಮನುಷ್ಯನಾಗಿದ್ದರೆ ಪರಲೋಕದಿಂದ ಬೆಂಕಿಯು ಕೆಳಗಿಳಿದು ಬಂದು ನಿನ್ನನ್ನೂ ನಿನ್ನ ಐವತ್ತು ಜನರನ್ನೂ ನಾಶಗೊಳಿಸಲಿ!'' ಎಂದು ಹೇಳಿದನು.

ಆಗ ಪರಲೋಕದಿಂದ ದೇವರ ಬೆಂಕಿಯು ಇಳಿದು ಬಂದು ಸೇನಾಧಿಪತಿಯನ್ನೂ ಅವನ ಐವತ್ತು ಜನರನ್ನೂ ನಾಶಗೊಳಿಸಿತು.

13ಅಹಜ್ಯನು ಮೂರನೆಯ ಸೇನಾಧಿಪತಿಯನ್ನು ಐವತ್ತು ಜನರೊಂದಿಗೆ ಕಳುಹಿಸಿದನು. ಐವತ್ತು ಮಂದಿಯ ಮೂರನೆಯ ಸೇನಾಧಿಪತಿಯು ಎಲೀಯನ ಬಳಿಗೆ ಬಂದನು. ಸೇನಾಧಿಪತಿಯು ತನ್ನ ಮೊಣಕಾಲುಗಳ ಮೇಲೆ ಬಿದ್ದು ನಮಸ್ಕರಿಸಿದನು. ಸೇನಾಧಿಪತಿಯು ಎಲೀಯನನ್ನು ಬೇಡಿಕೊಳ್ಳುತ್ತಾ ಅವನಿಗೆ, ''ದೇವ ಮನುಷ್ಯನೇ, ನನ್ನ ಮತ್ತು ಈ ಐವತ್ತು ಜನರ ಪ್ರಾಣವು
ನಿನ್ನ ದೃಷ್ಟಿಯಲ್ಲಿ ಬೆಲೆಯುಳ್ಳದ್ದಾಗಿರಲಿ! 14ಪರಲೋಕ
ದಿಂದ ಕೆಳಗಿಳಿದು ಬಂದ ಬೆಂಕಿಯು ಮೊದಲ ಇಬ್ಬರು ಸೇನಾಧಿಪತಿಗಳನ್ನೂ ಅವರ ಐವತ್ತು ಜನರನ್ನೂ ನಾಶಗೊಳಿಸಿತು. ಆದರೆ ಈಗ ನಮ್ಮ ಮೇಲೆ ಕನಿಕರ ತೋರಿ ಜೀವಿಸಲು ಅವಕಾಶ ಮಾಡಿಕೊಡು'' ಎಂದು ಹೇಳಿದನು.

15ಯೆಹೋವನ ದೂತನು ಎಲೀಯನಿಗೆ, ''ಸೇನಾಧಿಪತಿಯೊಡನೆ ಹೋಗು, ಅವನಿಗೆ ಹೆದರಬೇಡ'' ಎಂದು ಹೇಳಿದನು.

ಎಲೀಯನು ರಾಜನಾದ ಅಹಜ್ಯನನ್ನು ನೋಡಲು ಆ ಸೇನಾಧಿಪತಿಯೊಡನೆ ಹೋದನು.

16ಎಲೀಯನು ಅಹಜ್ಯನಿಗೆ, ''ಇಸ್ರೇಲಿನಲ್ಲಿ ದೇವರಿದ್ದಾನೆ. ಹೀಗಿರುವಾಗ ನೀನು ಎಕ್ರೋನಿನ ದೇವರಾದ ಬಾಳ್ಜೆಬೂಬನನ್ನು ಪ್ರಶ್ನೆಗಳನ್ನು ಕೇಳಲು ಸಂದೇಶಕರನ್ನು ಏಕೆ ಕಳುಹಿಸಿದೆ? ನೀನು ಈ ಕಾರ್ಯವನ್ನು ಮಾಡಿದ್ದರಿಂದ ನಿನ್ನ ಹಾಸಿಗೆಯಿಂದ ನೀನು ಮೇಲಕ್ಕೇಳುವುದಿಲ್ಲ. ನೀನು ಅಲ್ಲೇ ಸಾಯುವೆ!'' ಎಂದನು.

17ಎಲೀಯನ ಮೂಲಕ ಯೆಹೋವನು ಹೇಳಿದಂತೆಯೇ ಅಹಜ್ಯನು ಸತ್ತುಹೋದನು. ಅಹಜ್ಯನಿಗೆ ಮಕ್ಕಳಿರಲಿಲ್ಲ. ಆದ್ದರಿಂದ ಅಹಜ್ಯನಿಗೆ ನಂತರ ಯೋರಾಮನು ಹೊಸ ರಾಜನಾದನು. ಯೆಹೋಷಾಫಾಟನ ಮಗನಾದ ಯೆಹೋರಾಮನು ಯೆಹೂದದ ರಾಜನಾಗಿದ್ದ ಎರಡನೆಯ ವರ್ಷದಲ್ಲಿ ಯೊಹೋರಾಮನು ಆಳುವುದಕ್ಕೆ ಆರಂಭಿಸಿದನು. 18ಅಹಜ್ಯನು
ಮಾಡಿದ ಇತರ ಕಾರ್ಯಗಳ ಬಗ್ಗೆ ''ಇಸ್ರೇಲಿನ ರಾಜರುಗಳ ಇತಿಹಾಸ'' ಎಂಬ ಪುಸ್ತಕದಲ್ಲಿ ಬರೆಯಲಾಗಿದೆ.

### ಎಲೀಯನ ಪರಲೋಕಾರೋಹಣ

2 ಯೆಹೋವನು ಎಲೀಯನನ್ನು ಸುಂಟರಗಾಳಿಯ ಮೂಲಕ ಪರಲೋಕಕ್ಕೆ ಕರೆದುಕೊಳ್ಳುವ ಕಾಲ ಹತ್ತಿರ ಬಂದಿತು. ಎಲೀಯನು ಎಲೀಷನೊಡನೆ ಗಿಲ್ಗಾಲಿನಿಂದ ಹೋದನು.

2ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು; ಏಕೆಂದರೆ ಬೇತೇಲಿಗೆ ಹೋಗುವಂತೆ ಯೆಹೋವನು ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಆದರೆ ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ''ಎಂದು ಹೇಳಿದನು. ಇಬ್ಬರೂ ಬೇತೇಲಿಗೆ ಹೋದರು.

3ಬೇತೇಲಿನಲ್ಲಿ ಪ್ರವಾದಿಗಳ ಗುಂಪೊಂದು ಎಲೀಷನ ಬಳಿಗೆ ಬಂದು, ಅವನಿಗೆ, ''ಯೆಹೋವನು ಈ ದಿನ ನಿನ್ನ ಒಡೆಯನನ್ನು ನಿನ್ನಿಂದ ತೆಗೆದುಕೊಳ್ಳುತ್ತಾನೆಂಬುದು ನಿನಗೆ ತಿಳಿದಿದೆಯೇ'' ಎಂದು ಕೇಳಿದರು.

ಎಲೀಷನು, ''ಹೌದು, ನನಗೆ ಅದು ತಿಳಿದಿದೆ. ಅದರ ಬಗ್ಗೆ ಮಾತನಾಡಬೇಡಿ'' ಎಂದನು.

4ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು, ಏಕೆಂದರೆ ಯೆಹೋವನು ಜೆರಿಕೋವಿಗೆ ಹೋಗುವಂತೆ ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಆದರೆ ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ!'' ಎಂದು ಹೇಳಿದನು. ಇಬ್ಬರೂ ಜೆರಿಕೋವಿಗೆ ಹೋದರು.

5ಜೆರಿಕೋದಲ್ಲಿ ಪ್ರವಾದಿಗಳ ಗುಂಪೊಂದು ಎಲೀಷನ ಬಳಿಗೆ ಬಂದು ಅವನಿಗೆ, ''ಯೆಹೋವನು ಈ ದಿನ ನಿನ್ನ ಒಡೆಯನನ್ನು ನಿನ್ನಿಂದ ತೆಗೆದುಕೊಳ್ಳುತ್ತಾನೆಂಬುದು ನಿನಗೆ ತಿಳಿದಿದೆಯೇ?'' ಎಂದು ಕೇಳಿದರು.

ಎಲೀಷನು, ''ಹೌದು, ನನಗೆ ಅದು ತಿಳಿದಿದೆ. ಅದರ ಬಗ್ಗೆ ಮಾತನಾಡಬೇಡಿ''ಎಂದನು.

6ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು, ಏಕೆಂದರೆ ಯೆಹೋವನು ಜೋರ್ಡನ್ ನದಿಗೆ ಹೋಗುವಂತೆ ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ'' ಎಂದು ಹೇಳಿದನು. ಅವರಿಬ್ಬರೂ ಮುಂದೆ ಸಾಗಿದರು.

[7]ಅವರನ್ನು ಹಿಂಬಾಲಿಸಿಕೊಂಡು ಬಂದ ಪ್ರವಾದಿಗಳ ಗುಂಪಿನಲ್ಲಿ ಐವತ್ತು ಮಂದಿ ಅಲ್ಲಿದ್ದರು. ಎಲೀಯ ಮತ್ತು ಎಲೀಷರು ಜೋರ್ಡನ್ ನದಿಯ ಹತ್ತಿರ ನಿಂತು ಕೊಂಡರು. ಆ ಐವತ್ತು ಮಂದಿ ಜನರು ಎಲೀಯ ಮತ್ತು ಎಲೀಷರಿಗಿಂತ ಬಹುದೂರದಲ್ಲಿ ನಿಂತುಕೊಂಡರು.
[8]ಎಲೀಯನು ತನ್ನ ಮೇಲಂಗಿಯನ್ನು ತೆಗೆದು ಅದರಿಂದ ನೀರನ್ನು ಹೊಡೆದನು. ಈಗ ನೀರು ಎರಡು ಭಾಗವಾಗಿ ಬಲಗಡೆಯಲ್ಲಿಯೂ ಎಡಗಡೆಯಲ್ಲಿಯೂ ನಿಂತು ಕೊಂಡಿತು. ನಂತರ ಎಲೀಯ ಮತ್ತು ಎಲೀಷರು ಒಣನೆಲದ ಮೇಲೆ ನದಿಯನ್ನು ದಾಟಿದರು.

[9]ಅವರು ನದಿಯನ್ನು ದಾಟಿದ ಮೇಲೆ ಎಲೀಯನು ಎಲೀಷನಿಗೆ, ''ದೇವರು ನನ್ನನ್ನು ನಿನ್ನಿಂದ ತೆಗೆದು ಕೊಳ್ಳುವುದಕ್ಕೆ ಮುಂಚೆ, ನಾನು ನಿನಗೆ ಏನು ಮಾಡ ಬೇಕೆಂದು ನೀನು ಅಪೇಕ್ಷಿಸುವೆ?'' ಎಂದು ಕೇಳಿದನು. ಎಲೀಷನು, ''ನಿನ್ನ ಆತ್ಮವು ನನ್ನ ಮೇಲೆ ಎರಡ ರಷ್ಟಿರಬೇಕೆಂದು ನಾನು ನಿನ್ನಲ್ಲಿ ಬೇಡುತ್ತೇನೆ'' ಎಂದು ಹೇಳಿದನು.

[10]ಎಲೀಯನು, ''ನೀನು ಕಷ್ಟಕರವಾದುದನ್ನು ಬೇಡಿ ಕೊಂಡೆ. ನಿನ್ನಿಂದ ನನ್ನನ್ನು ತೆಗೆದುಕೊಳ್ಳುವಾಗ ನೀನು ನನ್ನನ್ನು ಕಂಡರೆ,ಅದು ನಿನಗೆ ದೊರೆಯುವುದು. ಆದರೆ ನಿನ್ನಿಂದ ನನ್ನನ್ನು ತೆಗೆದುಕೊಳ್ಳುವಾಗ ನೀನು ನನ್ನನ್ನು ಕಾಣದಿದ್ದರೆ, ಅದು ನಿನಗೆ ದೊರೆಯುವುದಿಲ್ಲ'' ಎಂದು ಹೇಳಿದನು.

[11]ಎಲೀಯ ಮತ್ತು ಎಲೀಷ ಒಟ್ಟಿಗೆ ನಡೆಯುತ್ತಾ ಮಾತನಾಡುತ್ತಿದ್ದರು. ಇದ್ದಕ್ಕಿದ್ದಂತೆ, ಕೆಲವು ಕುದುರೆಗಳು ಮತ್ತು ರಥಗಳು ಬಂದು ಎಲೀಯನನ್ನು ಎಲೀಷನಿಂದ ಬೇರ್ಪಡಿಸಿದವು. ಆ ಕುದುರೆಗಳು ಮತ್ತು ರಥಗಳು ಬೆಂಕಿಯಂತಿದ್ದವು! ನಂತರ ಎಲೀಯನು ಸುಂಟರ ಗಾಳಿಯಲ್ಲಿ ಪರಲೋಕಕ್ಕೆ ಏರಿಹೋದನು.

[12]ಎಲೀಷನು ಅದನ್ನು ನೋಡಿ, ''ನನ್ನ ತಂದೆಯೇ! ನನ್ನ ತಂದೆಯೇ! ಇಸ್ರೇಲಿಗೆ ರಥರಥಾಶ್ವಗಳೂ ಮತ್ತು ಅಶ್ವ ದಳವೂ ಆಗಿದ್ದವನೇ!'' ಎಂದು ಕೂಗಿಕೊಂಡನು.

ಎಲೀಷನು ಎಲೀಯನನ್ನು ಮತ್ತೆ ನೋಡಲಿಲ್ಲ. ಎಲೀಷನು ತನ್ನ ಬಟ್ಟೆಗಳನ್ನು ಹಿಡಿದುಕೊಂಡು, ತನ್ನ ದುಃಖವನ್ನು ತೋರ್ಪಡಿಸಲು ಅವುಗಳನ್ನು ಹರಿದು ಚೂರುಚೂರು ಮಾಡಿದನು.
[13]ಎಲೀಯನ ಮೇಲಂ ಗಿಯು ನೆಲದ ಮೇಲೆ ಬಿತ್ತು. ಎಲೀಷನು ಅದನ್ನು ಎತ್ತಿ ಕೊಂಡು ಅದರಿಂದ ನೀರನ್ನು ಹೊಡೆದು, ''ಎಲೀಯನ ದೇವರಾದ ಯೆಹೋವನು ಎಲ್ಲಿದ್ದಾನೆ?'' ಎಂದು ಕೇಳಿದನು.

[14]ಎಲೀಷನು ನೀರನ್ನು ಹೊಡೆದಾಗ, ನೀರು ಎರಡು ಭಾಗವಾಗಿ ಬಲಗಡೆಯಲ್ಲೂ ಎಡಗಡೆಯಲ್ಲೂ ನಿಂತು ಕೊಂಡಿತು! ಎಲೀಷನು ನದಿಯನ್ನು ದಾಟಿದನು.

### ಎಲೀಯನ ಬಗ್ಗೆ ಪ್ರವಾದಿಗಳ ವಿಚಾರ

[15]ಜೆರಿಕೋದಲ್ಲಿ ಪ್ರವಾದಿಗಳ ಗುಂಪೊಂದು ಎಲಿ ೕಷನನ್ನು ಕಂಡು, ''ಎಲೀಯನ ಆತ್ಮವು ಈಗ ಎಲೀಷನ ಮೇಲಿದೆ!'' ಎಂದು ಹೇಳಿ ಎಲೀಷನನ್ನು ಭೇಟಿಮಾಡಲು ಬಂದರು. ಅವರು ಎಲೀಷನಿಗೆ ಸಾಷ್ಟಾಂಗ ನಮಸ್ಕಾರ ಮಾಡಿದರು.
[16]ಅವರು ಅವನಿಗೆ, ''ನೋಡು, ನಮ್ಮಲ್ಲಿ ಐವತ್ತು ಮಂದಿ ಒಳ್ಳೆಯ ಜನರಿದ್ದಾರೆ. ನಿನ್ನ ಒಡೆಯನನ್ನು ಹುಡುಕಲು ದಯವಿಟ್ಟು ಅವರಿಗೆ ಅವಕಾಶ ಕೊಡು. ಯೆಹೋವನ ಆತ್ಮವು ಎಲೀಯನನ್ನು ಮೇಲಕ್ಕೆ ಎತ್ತಿ ಕೊಂಡು ಹೋಗಿ ಯಾವುದಾದರೂ ಬೆಟ್ಟದ ಮೇಲಾ ಗಲೀ ಅಥವಾ ಕಣಿವೆಯಲ್ಲಾಗಲೀ ಬೀಳಿಸಿರಬೇಕು'' ಎಂದು ಹೇಳಿದರು.

ಆದರೆ ಎಲೀಷನು, ''ಇಲ್ಲ, ಎಲೀಯನನ್ನು ಹುಡು ಕಲು ಜನರನ್ನು ಕಳುಹಿಸಬೇಡಿ!'' ಎಂದು ಉತ್ತರಿಸಿದನು.

[17]ಎಲೀಷನು ಕಿರಿಕಿರಿಗೊಂಡು ಒಪ್ಪಿಕೊಳ್ಳುವವರೆಗೆ ಆ ಪ್ರವಾದಿಗಳ ಗುಂಪು ಅವನನ್ನು ಬೇಡಿಕೊಂಡರು. ನಂತರ ಎಲೀಷನು, ''ಸರಿ, ಎಲೀಯನನ್ನು ಹುಡುಕಲು ಜನರನ್ನು ಕಳುಹಿಸಿ'' ಎಂದು ಹೇಳಿದನು.

ಪ್ರವಾದಿಗಳ ಗುಂಪು ಎಲೀಯನನ್ನು ಹುಡುಕಲು ಐವತ್ತು ಮಂದಿ ಜನರನ್ನು ಕುಳುಹಿಸಿದರು. ಅವರು ಮೂರು ದಿನ ಹುಡುಕಿದರೂ ಎಲೀಯನನ್ನು ಕಂಡು ಹಿಡಿಯಲಾಗಲಿಲ್ಲ.
[18]ಅವರು ಎಲೀಷನು ನೆಲೆಸಿದ್ದ ಜೆರಿಕೋವಿಗೆ ಹೋದರು. ಅವರು ಎಲೀಯನನ್ನು ಕಂಡುಹಿಡಿಯಲಾಗಲಿಲ್ಲವೆಂದು ಎಲೀಷನಿಗೆ ಹೇಳಿ ದರು. ಎಲೀಷನು ಅವರಿಗೆ, ''ನಾನು ನಿಮಗೆ ಹೋಗ ಬೇಡವೆಂದು ಹೇಳಿದೆನಲ್ಲ'' ಎಂದನು.

### ಎಲೀಷನು ನೀರನ್ನು ಶುಚಿಗೊಳಿಸಿದನು

[19]ನಗರದ ಜನರು ಎಲೀಷನಿಗೆ, ''ಸ್ವಾಮೀ, ಈ ನಗರವು ಒಳ್ಳೆಯ ಸ್ಥಳದಲ್ಲಿದೆಯೆಂಬುದನ್ನು ನೀನು ನೋಡುತ್ತಿರುವೆ. ಆದರೆ ನೀರು ತುಂಬಾ ಕೆಟ್ಟಿದೆ. ಆ ಕಾರಣದಿಂದಲೇ ಈ ಭೂಮಿಯಲ್ಲಿ ಬೆಳೆಗಳನ್ನು ಬೆಳೆ ಯಲಾಗುತ್ತಿಲ್ಲ'' ಎಂದು ಹೇಳಿದರು.

[20]ಎಲೀಷನು, ''ಒಂದು ಹೊಸ ಬೋಗುಣಿಯನ್ನು ತಂದು ಅದರಲ್ಲಿ ಉಪ್ಪನ್ನು ಹಾಕಿ'' ಎಂದನು.

ಜನರು ಎಲೀಷನ ಬಳಿಗೆ ಒಂದು ಬೋಗುಣಿಯನ್ನು
ತಂದರು.[21]ನಂತರ ಎಲೀಷನು ನೆಲದಿಂದ ನೀರು ಹರಿಯುತ್ತಿದ್ದ ಸ್ಥಳಕ್ಕೆ ಹೋದನು. ಎಲೀಷನು ಉಪ್ಪನ್ನು ನೀರಿನಲ್ಲಿ ಎಸೆದು, ''ನಾನು ಈ ನೀರನ್ನು ಶುಚಿ ಗೊಳಿಸಿದ್ದೇನೆ! ಇಲ್ಲಿಂದಾಚೆಗೆ ಈ ನೀರು ಯಾರಿಗೂ ಸಾವನ್ನು ಉಂಟುಮಾಡುವುದಿಲ್ಲ ಮತ್ತು ಈ ಭೂಮಿ ಯಲ್ಲಿ ಬೆಳೆಗಳು ಬೆಳೆಯುತ್ತವೆ' ಎಂದು ಯೆಹೋವನು ಹೇಳುತ್ತಾನೆ'' ಎಂದನು.

22ಆ ನೀರು ಶುದ್ಧವಾಯಿತು. ಇಂದು ಆ ನೀರು ಇನ್ನೂ
ಶುದ್ಧವಾಗಿದೆ. ಎಲೀಷನು ಹೇಳಿದಂತೆಯೇ ಅದು
ಸಂಭವಿಸಿತು.

### ಕೆಲವು ಬಾಲಕರು ಎಲೀಷನನ್ನು ಅಪಹಾಸ್ಯ ಮಾಡಿದರು

23ಎಲೀಷನು ಆ ನಗರದಿಂದ ಬೇತೇಲಿಗೆ ಹೋದನು.
ಎಲೀಷನು ನಗರದಿಂದ ಬೆಟ್ಟದ ಮೇಲಕ್ಕೆ ಹೋಗು
ತ್ತಿದ್ದಾಗ, ಕೆಲವು ಬಾಲಕರು ನಗರದ ಕಡೆಯಿಂದ ಇಳಿ
ಯುತ್ತಿದ್ದರು. ಅವರು ಎಲೀಷನನ್ನು ಹಾಸ್ಯಮಾಡಿ,
''ಮೇಲಕ್ಕೆ ಹೋಗು, ಬೋಳುತಲೆಯವನೇ, ಮೇಲಕ್ಕೆ
ಹೋಗು, ಬೋಳುತಲೆಯವನೇ''ಎಂದರು.
24ಎಲೀಷನು ಹಿಂದಕ್ಕೆ ತಿರುಗಿ ಅವರನ್ನು ನೋಡಿ
ಅವರಿಗೆ ಕೇಡಾಗುವಂತೆ ಯೆಹೋವನನ್ನು ಕೇಳಿ
ಕೊಂಡನು. ಆಗ ಕಾಡಿನಿಂದ ಎರಡು ಕರಡಿಗಳು ಹೊರಗೆ
ಬಂದು ಅವರ ಮೇಲೆರಗಿ ನಲವತ್ತೆರಡು ಮಂದಿ
ಬಾಲಕರನ್ನು ಸೀಳಿಹಾಕಿದವು.
25ಎಲೀಷನು ಬೇತೇಲನ್ನು ಬಿಟ್ಟು ಕಾರ್ಮೆಲ್ ಬೆಟ್ಟಕ್ಕೆ
ಹೋದನು. ಅಲ್ಲಿಂದ ಎಲೀಷನು ಸಮಾರ್ಯಕ್ಕೆ
ಹಿಂದಿರುಗಿ ಹೋದನು.

### ಯೋರಾಮನು ಇಸ್ರೇಲಿನ ರಾಜನಾದನು

3 ಅಹಾಬನ ಮಗನಾದ ಯೋರಾಮನು ಸಮಾರ್ಯ
ದಲ್ಲಿ ಇಸ್ರೇಲಿನ ರಾಜನಾದನು. ಯೆಹೋಷಾಫಾ
ಟನ ಹದಿನೆಂಟನೆಯ ವರ್ಷದ ಆಳ್ವಿಕೆಯಲ್ಲಿ ಯೋರಾ
ಮನು ಯೆಹೂದದ ರಾಜನಾಗಿ ಆಳಲಾರಂಭಿಸಿದನು.
ಯೋರಾಮನು ಹನ್ನೆರಡು ವರ್ಷ ಆಳಿದನು.
2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಯೋರಾಮನು ಮಾಡಿದನು. ಆದರೆ ಯೋರಾಮನು
ಅವನ ತಂದೆತಾಯಿಗಳಂತೆ ಇರಲಿಲ್ಲ. ಸುಳ್ಳುದೇವರಾದ
ಬಾಳನನ್ನು ಪೂಜಿಸಲು ತನ್ನ ತಂದೆಯು ನಿರ್ಮಿಸಿದ್ದ
ಸ್ತಂಭವನ್ನು ಅವನು ಕಿತ್ತುಹಾಕಿಸಿದನು. 3ಆದರೆ ನೆಬಾಟನ
ಮಗನಾದ ಯಾರೊಬ್ಬಮನು ಮಾಡಿದ ಪಾಪಗಳನ್ನೇ
ಅವನು ಮುಂದುವರಿಸಿದನು. ಇಸ್ರೇಲರು ಪಾಪಗಳನ್ನು
ಮಾಡುವಂತೆ ಯಾರೊಬ್ಬಾಮನು ಪ್ರೇರೇಪಿಸಿದ್ದನು.
ಯೋರಾಮನು ಯಾರೊಬ್ಬಾಮನ ಪಾಪಗಳನ್ನು
ನಿಲ್ಲಿಸಲಿಲ್ಲ.

### ಮೋವಾಬ್ ದೇಶವು ಇಸ್ರೇಲಿನಿಂದ ಬೇರ್ಪಟ್ಟಿತು

4ಮೇಷನು ಮೋವಾಬಿನ ರಾಜನಾಗಿದ್ದನು. ಮೇಷನು
ಅನೇಕ ಕುರಿಗಳ ಒಡೆಯನಾಗಿದ್ದನು. ಮೇಷನು ಒಂದು
ಲಕ್ಷ ಕುರಿಗಳ ಮತ್ತು ಒಂದು ಲಕ್ಷ ಟಗರುಗಳ ಉಣ್ಣೆ
ಯನ್ನು ಇಸ್ರೇಲಿನ ರಾಜನಿಗೆ ಕೊಡುತ್ತಿದ್ದನು. 5ಆದರೆ
ಅಹಾಬನು ಸತ್ತಾಗ ಮೋವಾಬಿನ ರಾಜನು ಇಸ್ರೇಲಿನ
ರಾಜನ ವಿರುದ್ಧವಾಗಿ ದಂಗಯೆದ್ದು ಅವನ ಆಳ್ವಿಕೆಯಿಂದ
ಬೇರೆಯಾದನು.
6ಆಗ ರಾಜನಾದ ಯೋರಾಮನು ಸಮಾರ್ಯದಿಂದ
ಹೊರಗೆ ಹೋಗಿ, ಇಸ್ರೇಲಿನ ಜನರನ್ನೆಲ್ಲ ಒಟ್ಟು
ಗೂಡಿಸಿದನು. 7ಯೋರಾಮನು ಯೆಹೂದದ ರಾಜ
ನಾದ ಯೆಹೋಷಾಫಾಟನ ಬಳಿಗೆ ಸಂದೇಶಕರನ್ನು
ಕಳುಹಿಸಿ, ''ನನ್ನ ಆಳ್ವಿಕೆಯಿಂದ ಮೋವಾಬಿನ ರಾಜನು
ಬೇರ್ಪಟ್ಟಿದ್ದಾನೆ. ಮೋವಾಬಿನ ವಿರುದ್ಧ ಹೋರಾಡಲು
ನನ್ನ ಜೊತೆ ಬರುವೆಯಾ?'' ಎಂದು ಕೇಳಿದನು.
ಯೆಹೋಷಾಫಾಟನು, ''ಆಗಲಿ, ನಿನ್ನ ಜೊತೆ ನಾನೂ
ಬರುತ್ತೇನೆ. ನಾನೂ ನೀನೂ ಒಂದೇ. ನನ್ನ ಜನರೂ ನಿನ್ನ
ಜನರೂ ಒಂದೇ. ನನ್ನ ಕುದುರೆಗಳೂ ನಿನ್ನ ಕುದುರೆಗಳೂ
ಒಂದೇ'' ಎಂದು ಹೇಳಿದನು.

### ಮೂವರು ರಾಜರು ಎಲೀಷನ ಸಲಹೆ ಕೇಳುವರು

8ಯೆಹೋಷಾಫಾಟನು ಯೋರಾಮನನ್ನು, ''ನಾವು
ಯಾವ ಮಾರ್ಗದಲ್ಲಿ ಹೋಗೋಣ'' ಎಂದು ಕೇಳಿದನು.
''ನಾವು ಎದೋಮಿನ ಮರಳುಗಾಡಿನ ಮೂಲಕ
ಹೋಗೋಣ'' ಎಂದು ಯೋರಾಮನು ಉತ್ತರಿಸಿದನು.
9ಆದುದರಿಂದ ಇಸ್ರೇಲಿನ ರಾಜನು ಯೆಹೂದದ
ಮತ್ತು ಎದೋಮಿನ ರಾಜರೊಂದಿಗೆ ಹೋದನು.
ಅವರು ಏಳು ದಿನಗಳ ಕಾಲ ಪ್ರಯಾಣ ಮಾಡಿದರು.
ಅವರ ಸೇನೆಗೆ ಮತ್ತು ಪ್ರಾಣಿಗಳಿಗೆ ಸಾಕಾಗುವಷ್ಟು ನೀರು
ಅಲ್ಲಿ ಇರಲಿಲ್ಲ. 10ಆಗ ಇಸ್ರೇಲಿನ ರಾಜನು
(ಯೋರಾಮ), ''ಅಯ್ಯೋ, ಮೂವರು ರಾಜರಾದ
ನಮ್ಮನ್ನು ನಿಜ ವಾಗಿಯೂ ಒಟ್ಟಿಗೆ ಬರಮಾಡಿದ
ಯೆಹೋವನು ನಮ್ಮನ್ನು ಮೋವಾಬ್ಯರು ಸೋಲಿಸುವಂತೆ
ಮಾಡಿದ ನಲ್ಲಾ!''ಎಂದು ಹೇಳಿದನು.
11ಆದರೆ ಯೆಹೋಷಾಫಾಟನು, ''ಯೆಹೋವನ
ಪ್ರವಾದಿಗಳಲ್ಲಿ ನಿಜವಾಗಿಯೂ ಯಾರಾದರೊಬ್ಬರು
ಇಲ್ಲಿರಬೇಕು. ನಾವೇನು ಮಾಡಬೇಕೆಂದು ಯೆಹೋ
ವನು ಹೇಳುತ್ತಾನೆ. ಆದಕ್ಕಾಗಿ ನಾವು ಆ ಪ್ರವಾದಿಯನ್ನು
ಕೇಳೋಣ'' ಎಂದು ಹೇಳಿದನು.
ಇಸ್ರೇಲಿನ ರಾಜನ ಸೇವಕರಲ್ಲಿ ಒಬ್ಬನು, ''ಶಾಫಾಟನ
ಮಗನಾದ ಎಲೀಷನು ಇಲ್ಲಿಯೇ ಇದ್ದಾನೆ. ಎಲೀಷನು
ಎಲೀಯನ ಸೇವಕನಾಗಿದ್ದನು*'' ಎಂದು ಹೇಳಿದನು.
12ಯೆಹೋಷಾಫಾಟನು, ''ಯೆಹೋವನ ನುಡಿಗಳು
ಎಲೀಷನಲ್ಲಿವೆ!'' ಎಂದು ಹೇಳಿದನು.
ಇಸ್ರೇಲಿನ ರಾಜನಾದ ಯೋರಾಮನು, ಯೆಹೋ
ಷಾಫಾಟನು ಮತ್ತು ಎದೋಮಿನ ರಾಜನು ಎಲೀಷನನ್ನು

---

**ಎಲೀಷನು ಎಲೀಯನ ಸೇವಕನಾಗಿದ್ದನು** ಅಕ್ಷರಶಃ ಎಲೀಷನು
ಎಲೀಯನ ಹಸ್ತಗಳ ಮೇಲೆ ನೀರನ್ನು ಸುರಿದನು.

ನೋಡಲು ಹೋದರು. [13]ಎಲೀಷನು ಇಸ್ರೇಲಿನ
ರಾಜನಿಗೆ, ''ನನ್ನಿಂದ ನಿನಗೆ ಏನು ಬೇಕಾಗಿದೆ? ನಿನ್ನ
ತಂದೆತಾಯಿಯರ ಪ್ರವಾದಿಗಳ ಬಳಿಗೆ ಹೋಗು!''
ಎಂದು ಹೇಳಿದನು.

ಇಸ್ರೇಲಿನ ರಾಜನು ಎಲೀಷನಿಗೆ, ''ಇಲ್ಲ, ನಾವು
ನಿನ್ನನ್ನು ನೋಡಲೆಂದು ಇಲ್ಲಿಗೆ ಬಂದಿದ್ದೇವೆ, ಏಕೆಂದರೆ
ಯೆಹೋವನು ಮೂವರು ರಾಜರನ್ನು ಒಟ್ಟಿಗೆ ಬರ
ಮಾಡಿ, ನಮ್ಮನ್ನು ಮೋವಾಬ್ಯರು ಸೋಲಿಸುವಂತೆ
ಮಾಡಿದ್ದಾನೆ. ನಾವು ನಿನ್ನ ಸಹಾಯವನ್ನು ಬಯಸಿ
ದ್ದೇವೆ''ಎಂದನು.

[14]ಎಲೀಷನು, ''ಸರ್ವಶಕ್ತನಾದ ಯೆಹೋವನ ಸೇವೆ
ಯನ್ನು ಮಾಡುವವನು ನಾನು. ಯೆಹೋವನಾಣೆ, ನಾನು
ನಿಜವನ್ನು ಹೇಳುತ್ತೇನೆ. ಯೆಹೂದದ ರಾಜನಾದ
ಯೆಹೋಷಾಫಾಟನು ಇಲ್ಲಿ ಇಲ್ಲದಿದ್ದರೆ, ನಾನು ನಿನ್ನನ್ನು
ಕಣ್ಣೆತ್ತಿಯೂ ನೋಡುತ್ತಿರಲಿಲ್ಲ; ನಿನ್ನನ್ನು ಗಮನಿಸು
ತ್ತಲೂ ಇರಲಿಲ್ಲ. [15]ಆದರೆ ಈಗ ಕಿನ್ನರಿ ಬಾರಿಸುವ
ಒಬ್ಬನನ್ನು ನನ್ನ ಬಳಿಗೆ ಕರೆತನ್ನಿ''ಎಂದು ಹೇಳಿದನು.

ಅವನು ಕಿನ್ನರಿಯನ್ನು ಬಾರಿಸಿದಾಗ ಯೆಹೋವನ
ಶಕ್ತಿಯು ಎಲೀಷನ ಮೇಲೆ ಬಂದಿತು. [16]ಆಗ ಎಲೀಷನು,
''ಯೆಹೋವನು ಇಂತೆನ್ನುತ್ತಾನೆ: ಕಣಿವೆಯಲ್ಲಿ ಗುಂಡಿ
ಗಳನ್ನು ತೋಡಿರಿ. [17]ನೀವು ಗಾಳಿಯನ್ನು ನೋಡು
ವುದಿಲ್ಲ, ಮಳೆಯನ್ನೂ ನೋಡುವುದಿಲ್ಲ; ಆದರೆ ಆ
ಕಣಿವೆಯು ನೀರಿನಿಂದ ತುಂಬಿಕೊಳ್ಳುತ್ತದೆ. ಆಗ ನಿಮಗೆ,
ನಿಮ್ಮ ಹಸುಗಳಿಗೆ ಮತ್ತು ಇತರ ಪಶುಗಳಿಗೆ ಕುಡಿಯಲು
ನೀರು ಸಿಗುತ್ತದೆ. [18]ಯೆಹೋವನಿಗೆ ಸುಲಭ ಸಾಧ್ಯ.
ಮೋವಾಬ್ಯರನ್ನು ನೀವು ಸೋಲಿಸುವಂತೆ ಆತನೇ ಅವ
ಕಾಶ ಮಾಡುತ್ತಾನೆ. [19]ಪ್ರತಿಯೊಂದು ಬಲಾಢ್ಯವಾದ
ನಗರವನ್ನು ಮತ್ತು ಉತ್ತಮ ನಗರವನ್ನು ನೀವು ಮುತ್ತಿಗೆ
ಹಾಕುವಿರಿ. ಪ್ರತಿಯೊಂದು ಒಳ್ಳೆಯ ಮರವನ್ನೂ ನೀವು
ಕಡಿದು ಉರುಳಿಸುತ್ತೀರಿ. ಎಲ್ಲಾ ನೀರಿನ ಬುಗ್ಗೆಗಳನ್ನೂ
ನೀವು ನಿಲ್ಲಿಸುವಿರಿ. ನೀವು ಕಲ್ಲುಗಳನ್ನೆಸೆದು ಪ್ರತಿ
ಯೊಂದು ಒಳ್ಳೆಯ ತೋಟವನ್ನು ನಾಶಗೊಳಿಸುತ್ತೀರಿ.''

[20]ಮುಂಜಾನೆ, ಯಜ್ಞಗಳನ್ನು ಅರ್ಪಿಸುವ ಕಾಲದಲ್ಲಿ
ಎದೋಮಿನ ಕಡೆಯಿಂದ ನೀರು ಹರಿಯಲಾರಂಭಿಸಿತು
ಮತ್ತು ಕಣಿವೆಯು ತುಂಬಿಕೊಂಡಿತು.

[21]ರಾಜರುಗಳು ತಮ್ಮ ವಿರುದ್ಧ ಹೋರಾಡಲು
ಬಂದಿದ್ದಾರೆಂಬುದು ಮೋವಾಬ್ಯರ ಜನರಿಗೆ ತಿಳಿಯಿತು.
ಮೋವಾಬಿನ ಗಂಡಸರು ಅಂದರೆ ಯುದ್ಧಕವಚಗಳನ್ನು
ಧರಿಸಿಕೊಳ್ಳಲು ಶಕ್ತರಾಗಿದ್ದ ಎಲ್ಲರು ಒಟ್ಟಾಗಿ ಸೇರಿ
ಬಂದು (ಯುದ್ಧಕ್ಕೆ ಸಿದ್ಧರಾಗಿ) ಗಡಿಯಲ್ಲಿ ಕಾಯ
ತೊಡಗಿದರು. [22]ಮೋವಾಬಿನ ಜನರು ಅಂದು
ಮುಂಜಾನೆ ನಸುಕಿನಲ್ಲೇ ಮೇಲೆದ್ದರು. ಸೂರ್ಯನ
ಕಿರಣಗಳು ಕಣಿವೆಯ ನೀರಿನ ಮೇಲೆ ಹೊಳೆಯುತ್ತಿದ್ದವು.
ಮೋವಾಬಿನ ಜನರಿಗೆ ಅವು ರಕ್ತದಂತೆ ಕಂಡವು.
[23]ಮೋವಾಬಿನ ಜನರು, ''ರಕ್ತದತ್ತ ನೋಡಿ! ರಾಜರು
ಗಳು ಪರಸ್ಪರ ಹೋರಾಡಿರಲೇಬೇಕು. ಅವರು ಒಬ್ಬರ
ನ್ನೊಬ್ಬರು ನಾಶಗೊಳಿಸಿರಲೇಬೇಕು. ಸತ್ತಿರುವ ದೇಹಗ
ಳಿಂದ ಬೆಲೆಬಾಳುವ ವಸ್ತುಗಳನ್ನು ದೋಚಿಕೊಳ್ಳೋಣ!''
ಎಂದು ಹೇಳಿದರು.

[24]ಮೋವಾಬಿನ ಜನರು ಇಸ್ರೇಲರ ಪಾಳೆಯಕ್ಕೆ
ಬಂದರು. ಆದರೆ ಇಸ್ರೇಲರು ಹೊರಗೆ ಬಂದು
ಮೋವಾಬಿನ ಸೈನ್ಯದ ಮೇಲೆ ಆಕ್ರಮಣ ಮಾಡಿದರು.
ಮೋವಾಬಿನ ಜನರು ಇಸ್ರೇಲಿಯರಿಂದ ತಪ್ಪಿಸಿಕೊಂಡು
ಓಡಿಹೋದರು. ಇಸ್ರೇಲರು ಮುನ್ನುಗ್ಗಿ ಮೋವಾಬಿನವ
ರನ್ನು ಕೊಂದುಹಾಕಿದರು. [25]ಇಸ್ರೇಲರು ನಗರಗಳನ್ನು
ಕೆಡವಿಹಾಕಿದರು. ಅವರು ಮೋವಾಬಿನ ಪ್ರತಿಯೊಂದು
ಉತ್ತಮ ತೋಟದ ಕಡೆಗೆ ಕಲ್ಲುಗಳನ್ನೆಸೆದರು. ಅವರು
ನೀರಿನ ಬುಗ್ಗೆಗಳನ್ನೆಲ್ಲ ನಿಲ್ಲಿಸಿದರು. ಅವರು ಉತ್ತಮ
ವಾದ ಮರಗಳನ್ನು ಕಡಿದು ಉರುಳಿಸಿದರು. ಇಸ್ರೇಲರು
ಕೀರ್ಹರೆಷೆತ್‌ನ ಮಾರ್ಗದುದ್ದಕ್ಕೂ ಹೋರಾಟ ಮಾಡಿ
ದರು. ಸೈನಿಕರು ಕೀರ್ಹರೆಷೆತ್‌ನ್ನು ಸುತ್ತುವರಿದು ಅದಕ್ಕೂ
ಮುತ್ತಿಗೆ ಹಾಕಿದರು.

[26]ಆ ಯುದ್ಧವು ತನ್ನ ಶಕ್ತಿಯನ್ನು ಮೀರಿ ಹೋಯಿ
ತೆಂದು ಮೋವಾಬಿನ ರಾಜನು ಗ್ರಹಿಸಿಕೊಂಡನು.
ಆದ್ದರಿಂದ ಅವನು ಎದೋಮಿನ ರಾಜನನ್ನು ಕೊಂದು
ಹಾಕಲು ಖಡ್ಗಗಳನ್ನು ಹಿಡಿದ ತನ್ನ ಏಳುನೂರು ಜನ
ರೊಂದಿಗೆ ನುಗ್ಗಿಹೋಗಲು ಪ್ರಯತ್ನಿಸಿದನು. ಆದರೆ
ಅವರು ಎದೋಮಿನ ರಾಜನ ಬಳಿಗೆ ನುಗ್ಗಿ ಹೋಗ
ಲಾಗಲಿಲ್ಲ.

[27]ಆಗ ಮೋವಾಬಿನ ರಾಜನು, ತನ್ನ ನಂತರ ರಾಜ
ನಾಗುವ ಹಿರಿಯ ಮಗನನ್ನು ಕರೆದೊಯ್ದನು. ಮೋವಾ
ಬಿನ ರಾಜನು ನಗರವನ್ನು ಸುತ್ತವರಿದಿರುವ ಗೋಡೆಯ
ಮೇಲೆ ತನ್ನ ಮಗನನ್ನು ವಧಿಸಿ ಸರ್ವಾಂಗ ಹೋಮವ
ನ್ನಾಗಿ ಅರ್ಪಿಸಿದನು. ಈ ಕಾರ್ಯವು ಇಸ್ರೇಲಿನ ಜನರನ್ನು
ತಳಮಳಗೊಳಿಸಿತು. ಇಸ್ರೇಲಿನ ಜನರು ಮೋವಾಬಿನ
ರಾಜನನ್ನು ಬಿಟ್ಟು ತಮ್ಮ ಸ್ವಂತ ದೇಶಕ್ಕೆ ಹಿಂದಿರುಗಿ
ಹೋದರು.

### ವಿಧವೆಯ ಬೇಡಿಕೆ

4 ಒಂದು ದಿನ ಪ್ರವಾದಿ ಮಂಡಲಿಯವರಲ್ಲೊಬ್ಬನ
ಪತ್ನಿಯು ಗೋಳಾಡುತ್ತಾ ಎಲೀಷನಲ್ಲಿಗೆ ಹೋಗಿ,
''ನನ್ನ ಗಂಡನು ನಿನಗೆ ಸೇವಕನಂತಿದ್ದನು. ಈಗ ನನ್ನ
ಗಂಡ ಸತ್ತಿದ್ದಾನೆ! ಅವನು ಯೆಹೋವನಲ್ಲಿ ಭಯಭಕ್ತಿ
ಉಳ್ಳವನಾಗಿದ್ದದು ನಿನಗೆ ತಿಳಿದಿದೆ. ಆದರೆ ಅವನು ಒಬ್ಬ
ಮನುಷ್ಯನಿಗೆ ಹಣವನ್ನು ಕೊಡಬೇಕಾಗಿದೆ. ಈಗ ಆ
ಮನುಷ್ಯನು ನನ್ನ ಎರಡು ಗಂಡು ಮಕ್ಕಳನ್ನು

ತೆಗೆದುಕೊಂಡು ತನ್ನ ಗುಲಾಮರನ್ನಾಗಿ ಮಾಡಿಕೊಳ್ಳಲು
ಬರುತ್ತಿದ್ದಾನೆ!'' ಎಂದು ಹೇಳಿದಳು.
2ಎಲೀಷನು, ''ನಾನು ನಿನಗೆ ಹೇಗೆ ಸಹಾಯ
ಮಾಡಲಿ? ನಿನ್ನ ಮನೆಯಲ್ಲಿ ಏನಿದೆ? ನನಗೆ ಅದನ್ನು
ತಿಳಿಸು'' ಎಂದು ಕೇಳಿದನು.

ಆ ಸ್ತ್ರೀಯು, ''ನನ್ನ ಮನೆಯಲ್ಲಿ ನನ್ನ ಹತ್ತಿರ ಏನೂ ಇಲ್ಲ. ನನ್ನ ಹತ್ತಿರ ಒಂದು ಪಾತ್ರೆ ಆಲೀವ್ ಎಣ್ಣೆ ಮಾತ್ರ ಇದೆ'' ಎಂದು ಹೇಳಿದಳು.

3ಆಗ ಎಲೀಷನು, ''ಹೋಗಿ ನಿನ್ನ ನೆರೆಯವರೆಲ್ಲರಿಂದ
ಪಾತ್ರೆಗಳನ್ನು ತೆಗೆದುಕೊ. ಅವು ಬರಿದಾಗಿರಬೇಕು.
ಆದಷ್ಟು ಪಾತ್ರೆಗಳನ್ನು ತೆಗೆದುಕೊ. 4ನಂತರ ನಿನ್ನ ಮನೆಗೆ
ಹೋಗಿ ಬಾಗಿಲುಗಳನ್ನು ಮುಚ್ಚು. ನೀನು ಮತ್ತು ನಿನ್ನ
ಮಕ್ಕಳು ಮಾತ್ರ ಮನೆಯಲ್ಲಿರಬೇಕು. ಈ ಪಾತ್ರೆಗಳಿ
ಗೆಲ್ಲಾ ಎಣ್ಣೆಯನ್ನು ತುಂಬಿಸಿ ಪ್ರತ್ಯೇಕವಾದ ಸ್ಥಳದಲ್ಲಿಡು''
ಎಂದು ಹೇಳಿದನು.
5ಆ ಸ್ತ್ರೀಯು ಎಲೀಷನ ಬಳಿಯಿಂದ ತನ್ನ ಮನೆಯೊಳಕ್ಕೆ
ಹೋಗಿ ಬಾಗಿಲನ್ನು ಮುಚ್ಚಿದಳು. ಅವಳು ಮತ್ತು ಅವಳ
ಮಕ್ಕಳು ಮಾತ್ರ ಮನೆಯಲ್ಲಿದ್ದರು. ಅವಳ ಮಕ್ಕಳು
ಪಾತ್ರೆಗಳನ್ನು ಅವಳ ಬಳಿಗೆ ತಂದರು; ಅವಳು ಆ
ಪಾತ್ರೆಗಳಿಗೆ ಎಣ್ಣೆಯನ್ನು ಸುರಿದಳು. 6ಅವಳು ಅನೇಕ
ಪಾತ್ರೆಗಳನ್ನು ತುಂಬಿಸಿಟ್ಟು ತನ್ನ ಮಗನಿಗೆ, ''ಇನ್ನೊಂದು
ಪಾತ್ರೆಯನ್ನು ನನ್ನ ಬಳಿಗೆ ತೆಗೆದುಕೊಂಡು ಬಾ''
ಎಂದಳು.

ಆದರೆ ಎಲ್ಲಾ ಪಾತ್ರೆಗಳು ತುಂಬಿಹೋಗಿದ್ದವು. ಅವಳ ಮಕ್ಕಳಲ್ಲಿ ಒಬ್ಬನು, ''ಇಲ್ಲಿ ಯಾವ ಪಾತ್ರೆಗಳೂ ಇಲ್ಲ'' ಎಂದು ಹೇಳಿದನು. ಆ ಸಮಯಕ್ಕೆ ಸರಿಯಾಗಿ ಪಾತ್ರೆಯಲ್ಲಿದ್ದ ಎಣ್ಣೆಯು ಮುಗಿದಿತ್ತು.

7ಆಗ ಆ ಸ್ತ್ರೀಯು ದೇವರ ಮನುಷ್ಯನ (ಎಲೀಷನ)
ಬಳಿಗೆ ಬಂದು ನಡೆದದ್ದನ್ನೆಲ್ಲಾ ತಿಳಿಸಿದಳು. ಎಲೀಷನು
ಅವಳಿಗೆ, ''ಹೋಗು, ಎಣ್ಣೆಯನ್ನು ಮಾರಾಟ ಮಾಡಿ,
ನಿನ್ನ ಸಾಲವನ್ನು ತೀರಿಸು. ಉಳಿದ ಹಣದಲ್ಲಿ ನೀನು ಮತ್ತು
ನಿನ್ನ ಮಕ್ಕಳು ಜೀವನ ಮಾಡಿ'' ಎಂದು ಹೇಳಿದನು.

### ಎಲೀಷ ಮತ್ತು ಶೂನೇಮಿನ ಸ್ತ್ರೀ

8ಒಂದು ದಿನ ಎಲೀಷನು ಶೂನೇಮಿಗೆ ಹೋದನು.
ಪ್ರಮುಖಳಾದ ಸ್ತ್ರೀಯೊಬ್ಬಳು ಶೂನೇಮಿನಲ್ಲಿ ವಾಸಿಸು
ತ್ತಿದ್ದಳು. ಆ ಸ್ತ್ರೀಯು ತನ್ನ ಮನೆಯಲ್ಲಿ ಊಟ
ಮಾಡಿಕೊಂಡು ಹೋಗುವಂತೆ ಎಲೀಷನನ್ನು ಕೇಳಿ
ಕೊಂಡಳು. ಅಂದಿನಿಂದ ಎಲೀಷನು ಆ ಸ್ಥಳದ ಮೂಲಕ
ಹೋಗುವಾಗಲೆಲ್ಲಾ ಅವಳ ಮನೆಯಲ್ಲಿ ಊಟ
ಮಾಡುತ್ತಿದ್ದನು.
9ಆ ಸ್ತ್ರೀಯು ತನ್ನ ಗಂಡನಿಗೆ, ''ನೋಡಿ, ನಮ್ಮ
ಮನೆಯ ದಾರಿಯಲ್ಲಿ ಹಾದುಹೋಗುವ ಎಲೀಷನು
ಪರಿಶುದ್ಧನೂ ದೇವಮನುಷ್ಯನೂ ಎಂದು ನನಗೆ
ತೋರುತ್ತದೆ. 10 ದಯವಿಟ್ಟು, ಎಲೀಷನಿಗಾಗಿ ಮಾಳಿ
ಗೆಯ ಮೇಲೆ ಚಿಕ್ಕದೊಂದು ಕೊಠಡಿಯನ್ನು ಕಟ್ಟೋಣ.
ಆ ಕೊಠಡಿಯಲ್ಲಿ ಹಾಸಿಗೆಯೊಂದನ್ನು ಹಾಕೋಣ. ಅಲ್ಲಿ
ಒಂದು ಮೇಜು, ಕುರ್ಚಿ ಮತ್ತು ದೀಪಸ್ತಂಭವನ್ನು
ಇಡೋಣ. ಅವನು ನಮ್ಮ ಮನೆಗೆ ಬಂದಾಗ, ಈ ಕೊಠಡಿ
ಯನ್ನು ತನಗಾಗಿ ಉಪಯೋಗಿಸಲಿ'' ಎಂದು ಹೇಳಿದನು.
11ಒಂದು ದಿನ ಎಲೀಷನು ಆ ಸ್ತ್ರೀಯ ಮನೆಗೆ ಬಂದನು.
ಅವನು ಆ ಕೊಠಡಿಗೆ ಹೋಗಿ ವಿಶ್ರಾಂತಿಯನ್ನು ಪಡೆ
ದನು. 12ಎಲೀಷನು ತನ್ನ ಸೇವಕನಾದ ಗೇಹಜಿಗೆ,
''ಶೂನೇಮ್ಯಳಾದ ಆ ಸ್ತ್ರೀಯನ್ನು ಕರೆದುಕೊಂಡು
ಬಾ'' ಎಂದು ಹೇಳಿದನು.

ಸೇವಕನು ಶೂನೇಮ್ಯಳಾದ ಆ ಸ್ತ್ರೀಯನ್ನು ಕರೆದು
ಕೊಂಡು ಬಂದಾಗ ಆಕೆಯು ಎಲೀಷನ ಎದುರಿನಲ್ಲಿ
ನಿಂತುಕೊಂಡಳು. 13ಎಲೀಷನು ಗೇಹಜಿಗೆ (ಸೇವಕ
ನಿಗೆ), ''ನೀನು ಆ ಸ್ತ್ರೀಯ ಬಳಿಗೆ ಹೋಗಿ, 'ನೋಡು,
ನೀನು ನಮ್ಮನ್ನು ಉಪಚರಿಸುವುದಕ್ಕಾಗಿ ನಿನ್ನಿಂದ ಸಾಧ್ಯ
ವಾದಷ್ಟು ಮಾಡಿರುವೆ. ನಮ್ಮಿಂದ ನಿನಗೇನಾದರೂ ಉಪ
ಕಾರವಾಗಬೇಕೇ? ನಿನ್ನ ಬಗ್ಗೆ ರಾಜನ ಬಳಿಯಲ್ಲಾದರೂ
ಅಥವಾ ಸೈನ್ಯಾಧಿಕಾರಿಯ ಬಳಿಯಲ್ಲಾದರೂ ನಾವು
ಮಾತನಾಡಬೇಕೇ?' ಎಂದು ಕೇಳು'' ಎಂಬುದಾಗಿ
ಹೇಳಿದನು.

ಆ ಸ್ತ್ರೀಯು, ''ಇಲ್ಲಿ ನಾನು ನನ್ನ ಜನರೊಡನೆ
ಸುಖವಾಗಿ ಜೀವಿಸುತ್ತಿದ್ದೇನೆ'' ಎಂದು ಉತ್ತರಿಸಿದಳು.
14ಎಲೀಷನು ಗೇಹಜಿಗೆ, ''ನಾನು ಅವಳಿಗೆ ಏನು
ಮಾಡಲಿ?'' ಎಂದು ಕೇಳಿದನು.

ಗೇಹಜಿಯು, ''ನನಗೆ ತಿಳಿದಿದೆ! ಅವಳಿಗೆ ಮಕ್ಕಳಿಲ್ಲ,
ಅವಳ ಗಂಡ ಮುದುಕನಾಗಿದ್ದಾನೆ'' ಎಂದು
ಉತ್ತರಿಸಿದನು.
15ಆಗ ಎಲೀಷನು, ''ಅವಳನ್ನು ಕರೆದುಕೊಂಡು ಬಾ''
ಎಂದು ಹೇಳಿದನು.

ಗೇಹಜಿಯು ಆ ಸ್ತ್ರೀಯನ್ನು ಕರೆದನು. ಆಕೆಯು
ಬಂದು ಅವನ ಬಾಗಿಲಿನ ಹತ್ತಿರ ನಿಂತಳು. 16ಎಲೀಷನು
ಆ ಸ್ತ್ರೀಗೆ, ''ಮುಂದಿನ ವಸಂತಮಾಸದ ಈ ಕಾಲಕ್ಕೆ ನೀನು
ನಿನ್ನ ಗಂಡುಮಗುವನ್ನು ಅಪ್ಪಿಕೊಂಡಿರುವೆ'' ಎಂದು
ಹೇಳಿದಳು.

ಆ ಸ್ತ್ರೀಯು, ''ದೇವಮನುಷ್ಯನೇ, ಹೀಗೆ ಹೇಳಿ ನಿನ್ನ
ಸೇವಕಿಯನ್ನು ವಂಚಿಸಬೇಡ'' ಎಂದು ಹೇಳಿದಳು.
17ಆ ಸ್ತ್ರೀಯು ಗರ್ಭಿಣಿಯಾದಳು. ಎಲೀಷನು
ಹೇಳಿದಂತೆ, ಮುಂದಿನ ವಂಸತದಲ್ಲಿ ಅವಳು ಒಬ್ಬ
ಮಗನಿಗೆ ಜನ್ಮ ನೀಡಿದಳು.
18ಬಾಲಕನು ಬೆಳೆದನು. ಒಂದು ದಿನ, ಹೊಲದಲ್ಲಿ
ಬೆಳೆಕೊಯ್ಯುತ್ತಿದ್ದ ಜನರೊಂದಿಗಿದ್ದ ತನ್ನ ತಂದೆಯನ್ನು

ನೋಡಲು ಆ ಬಾಲಕನು ಹೊಲಕ್ಕೆ ಹೋಗಿದ್ದನು. 19ಈ
ಬಾಲಕನು ತನ್ನ ತಂದೆಗೆ, ''ಅಯ್ಯೋ, ನನ್ನ ತಲೆ
ನೋಯುತ್ತಿದೆ! ನನ್ನ ತಲೆ ನೋಯುತ್ತಿದೆ!'' ಎಂದು
ಹೇಳಿದನು.

ತಂದೆಯು ತನ್ನ ಸೇವಕನಿಗೆ, ''ಅವನ ತಾಯಿಯ ಬಳಿಗೆ
ಅವನನ್ನು ಕೊಂಡೊಯ್ಯಿರಿ'' ಎಂದು ಹೇಳಿದನು.

20ಆ ಸೇವಕನು ಬಾಲಕನನ್ನು ಅವನ ತಾಯಿಯ
ಬಳಿಗೆ ಕರೆದೊಯ್ದನು. ಬಾಲಕನು ಮಧ್ಯಾಹ್ನದವರೆಗೆ
ತಾಯಿಯ ತೊಡೆಯ ಮೇಲೆ ಕುಳಿತಿದ್ದನು. ನಂತರ
ಅವನು ಸತ್ತುಹೋದನು.

## ಶೂನೇಮಿನ ಸ್ತ್ರೀಯು ಎಲೀಷನನ್ನು ನೋಡಲು ಹೋಗುವಳು

21ಆ ಸ್ತ್ರೀಯು ಬಾಲಕನನ್ನು ದೇವಮನುಷ್ಯನ
(ಎಲೀಷನ) ಹಾಸಿಗೆಯ ಮೇಲೆ ಮಲಗಿಸಿದಳು. ನಂತರ
ಅವಳು ಬಾಗಿಲನ್ನು ಮುಚ್ಚಿಕೊಂಡು, ಹೊರಗೆ
ಹೋದಳು, 22ಅವಳು ತನ್ನ ಗಂಡನನ್ನು ಕರೆದು, ''ದಯ
ವಿಟ್ಟು ಒಬ್ಬ ಸೇವಕನನ್ನೂ ಒಂದು ಹೇಸರಕತ್ತೆಯನ್ನೂ
ನನಗೆ ಕಳುಹಿಸಿಕೊಡಿ. ನಾನು ದೇವಮನುಷ್ಯನನ್ನು
ಕರೆತರಲು ಬೇಗ ಹೋಗಿ ಹಿಂದಿರುಗಿ ಬರುತ್ತೇನೆ''
ಎಂದು ಹೇಳಿದಳು.

23ಆ ಸ್ತ್ರೀಯ ಗಂಡನು, ''ಈ ದಿನ ದೇವಮನುಷ್ಯನ
ಬಳಿ ಹೋಗಲು ನೀನೇಕೆ ಅಪೇಕ್ಷೆ ಪಡುವೆ? ಇಂದು
ಅಮಾವಾಸ್ಯೆಯೂ ಅಲ್ಲ, ಸಬ್ಬತ್ ದಿನವೂ ಅಲ್ಲ'' ಎಂದು
ಹೇಳಿದನು.,

ಅವಳು, ''ಚಿಂತಿಸಬೇಡ, ಎಲ್ಲವೂ ಸರಿಹೋಗುತ್ತದೆ''
ಎಂದು ಹೇಳಿದಳು.

24ನಂತರ ಅವಳು ಒಂದು ತಡಿಯನ್ನು ಕತ್ತೆಯ ಮೇಲೆ
ಹಾಕಿ ತನ್ನ ಸೇವಕನಿಗೆ, ''ಬೇಗ ಬಾ! ನಾವು ವೇಗವಾಗಿ
ಸವಾರಿ ಮಾಡಿಕೊಂಡು ಹೋಗೋಣ. ನಾನು ನಿನಗೆ
ಹೇಳಿದಾಗ ನಿಧಾನಿಸು!'' ಎಂದು ಹೇಳಿದಳು.

25ಆ ಸ್ತ್ರೀಯು ದೇವಮನುಷ್ಯನನ್ನು ಕಾಣಲು
ಕರ್ಮೆಲ್ ಪರ್ವತಕ್ಕೆ ಹೋದಳು.

ಶೂನೇಮಿನ ಸ್ತ್ರೀಯು ದೂರದಿಂದ ಬರುತ್ತಿರುವು
ದನ್ನು ಕಂಡ ಎಲೀಷನು ತನ್ನ ಸೇವಕನಾದ ಗೇಹಜಿಗೆ,
''ನೋಡು, ಶೂನೇಮ್ಯಳಾದ ಸ್ತ್ರೀಯು ಬರುತ್ತಿದ್ದಾಳೆ!
26ಅವಳನ್ನು ಭೇಟಿ ಮಾಡುವುದಕ್ಕೆ ಓಡಿಹೋಗಿ ಅವಳಿಗೆ,
'ನೀನು ಕ್ಷೇಮವಾಗಿರುವೆಯಾ? ನಿನ್ನ ಗಂಡ ಕ್ಷೇಮವಾ
ಗಿರುವನೇ? ನಿನ್ನ ಮಗು ಕ್ಷೇಮವಾಗಿರುವುದೇ? ಎಂದು
ಕೇಳು'' ಎಂಬುದಾಗಿ ಹೇಳಿ ಕಳುಹಿಸಿದನು.

ಅಂತೆಯೇ ಗೇಹಜಿಯು ಆಕೆಯನ್ನು ಕೇಳಿದನು.
ಅವಳು, ''ಹೌದು, ಕ್ಷೇಮವಾಗಿದ್ದೇವೆ'' ಎಂದು
ಉತ್ತರಿಸಿದಳು.

27ಆದರೆ ಶೂನೇಮಿನ ಈ ಸ್ತ್ರೀಯು ದೇವಮನುಷ್ಯನಿದ್ದ
ಬೆಟ್ಟದವರೆಗೆ ಹೋದಳು. ಅವಳು ನೆಲಕ್ಕೆ ಬಾಗಿ,
ಎಲೀಷನ ಪಾದಗಳನ್ನು ಹಿಡಿದುಕೊಂಡಳು. ಶೂನೇಮಿನ
ಆ ಸ್ತ್ರೀಯನ್ನು ತಳ್ಳಿಬಿಡಲು ಗೇಹಜಿಯು ಹತ್ತಿರಕ್ಕೆ
ಬಂದನು. ಆದರೆ ದೇವಮನುಷ್ಯನು ಗೇಹಜಿಗೆ, ''ಅವ
ಳನ್ನು ತಡೆಯಬೇಡ! ಅವಳು ಬಹಳ ತಳಮಳಗೊಂಡಿ
ದ್ದಾಳೆ. ಯೆಹೋವನು ನನಗೆ ಆಕೆಯ ದುಃಖವನ್ನು
ಪ್ರಕಟಿಸಲಿಲ್ಲ; ನನಗೆ ಮರೆ ಮಾಡಿದ್ದಾನೆ'' ಎಂದು
ಹೇಳಿದನು.

28ಆಗ ಶೂನೇಮಿನ ಆ ಸ್ತ್ರೀಯು, ''ಸ್ವಾಮೀ, ನಾನು
ಮಗನನ್ನು ಕೇಳಲೇ ಇಲ್ಲ. 'ನನ್ನನ್ನು ವಂಚಿಸಬೇಡ'
ಎಂದು ನಾನು ನಿನಗೆ ಹೇಳಿದೆ!'' ಎಂದಳು.

29ಎಲೀಷನು ಗೇಹಜಿಗೆ, ''ಹೊರಡಲು ಸಿದ್ಧನಾಗು.
ನನ್ನ ಕೋಲನ್ನು ತೆಗೆದುಕೊಂಡು ಹೋಗು. ಯಾರ
ಹತ್ತಿರವಾಗಲಿ ಮಾತನಾಡಲು ನಿಲ್ಲದಿರು! ನೀನು
ಯಾರನ್ನಾದರೂ ಸಂಧಿಸಿದರೆ ಅವನಿಗೆ, 'ಕ್ಷೇಮವಾಗಿರು
ವೆಯಾ' ಎಂದು ಕೇಳದಿರು. ಯಾರಾದರೂ ನಿನ್ನನ್ನು
'ಕ್ಷೇಮವಾಗಿರುವೆಯಾ' ಎಂದು ಕೇಳಿದರೆ, ಅವನಿಗೆ
ಉತ್ತರಿಸದಿರು. ಹೀಗೆ ನೀನು ಹೋಗಿ ,ನನ್ನ ಕೋಲನ್ನು
ಮಗುವಿನ ಮುಖದ ಮೇಲೆ ಇಡು'' ಎಂದು ಹೇಳಿದನು.

30ಆದರೆ ಮಗುವಿನ ತಾಯಿಯು, ''ಯೆಹೋವನಾಣೆ,
ನಿನ್ನಾಣೆ, ನಿನ್ನನ್ನು ಬಿಟ್ಟು ನಾನು ಹೋಗುವುದಿಲ್ಲ''
ಎಂದು ಹೇಳಿದಳು. ಎಲೀಷನು ಮೇಲೆದ್ದು ಶೂನೇಮಿನ
ಆ ಸ್ತ್ರೀಯನ್ನು ಹಿಂಬಾಲಿಸಿದನು.

31ಶೂನೇಮಿನ ಆ ಸ್ತ್ರೀಯ ಮನೆಗೆ, ಎಲೀಷನು ಮತ್ತು
ಶೂನೇಮಿನ ಸ್ತ್ರೀಯು ಬರುವುದಕ್ಕೆ ಮುಂಚೆಯೇ ಗೇಹ
ಜಿಯು ಬಂದನು. ಗೇಹಜಿಯು ಮಗುವಿನ ಮುಖದ
ಮೇಲೆ ಆ ಕೋಲನ್ನಿಟ್ಟನು. ಆದರೆ ಆ ಮಗು ಮಾತ
ನಾಡಲಿಲ್ಲ; ಅಲುಗಾಡಲಿಲ್ಲ. ಆಗ ಗೇಹಜಿಯು ಎಲೀಷ
ನನ್ನು ಸಂಧಿಸಲು ಹಿಂದಿರುಗಿ ಬಂದು ಎಲೀಷನಿಗೆ,
''ಮಗು ಎಚ್ಚರಗೊಳ್ಳಲಿಲ್ಲ'' ಎಂದು ಹೇಳಿದನು.

32ಎಲೀಷನು ಮನೆಯೊಳಕ್ಕೆ ಬಂದನು. ಆ ಮಗು
ಅವನ ಹಾಸಿಗೆಯ ಮೇಲೆ ಸತ್ತುಬಿದ್ದಿತ್ತು. 33ಎಲೀಷನು
ಕೊಠಡಿಯಲ್ಲಿ ಪ್ರವೇಶಿಸಿ ಬಾಗಿಲನ್ನು ಮುಚ್ಚಿದನು. ಈಗ
ಎಲೀಷ ಮತ್ತು ಮಗು ಮಾತ್ರ ಕೊಠಡಿಯಲ್ಲಿದ್ದರು.
ನಂತರ ಎಲೀಷನು ಯೆಹೋವನಲ್ಲಿ ಪ್ರಾರ್ಥಿಸಿದನು.
34ಎಲೀಷನು ಹಾಸಿಗೆಗೆ ಹೋಗಿ ಮಗುವಿನ ಮೇಲೆ
ಮಲಗಿದನು. ಎಲೀಷನು ತನ್ನ ಬಾಯಿಯನ್ನು ಮಗುವಿನ
ಬಾಯಿಯ ಮೇಲಿಟ್ಟನು. ಎಲೀಷನು ತನ್ನ ಕಣ್ಣುಗಳನ್ನು
ಮಗುವಿನ ಕಣ್ಣುಗಳ ಮೇಲಿಟ್ಟನು. ಎಲೀಷನು ತನ್ನ
ಕೈಗಳನ್ನು ಮಗುವಿನ ಕೈಗಳ ಮೇಲಿಟ್ಟನು. ಎಲೀಷನು
ಕೈಚಾಚಿ ಮಗುವನ್ನು ಅಪ್ಪಿಕೊಂಡನು. ಆಗ ಮಗುವಿನ
ದೇಹವು ಬೆಚ್ಚಗಾಯಿತು.

[35]ಎಲೀಷನು ಕೊಠಡಿಯಿಂದ ಹೊರಗೆ ಬಂದು
ಮನೆಯಲ್ಲಿ ಸುತ್ತಲೂ ನಡೆದಾಡಿದನು. ನಂತರ ಅವನು
ಕೊಠಡಿಯೊಳಕ್ಕೆ ಹಿಂದಿರುಗಿ ಹೋಗಿ ಕೈಚಾಚಿ
ಮಗುವನ್ನು ಅಪ್ಪಿಕೊಂಡನು. ಆಗ ಮಗು ಏಳು ಸಾರಿ ಸೀನಿ
ತನ್ನ ಕಣ್ಣುಗಳನ್ನು ತೆರೆಯಿತು.
[36]ಎಲೀಷನು ಗೇಹಜಿಯನ್ನು ಕರೆದು, ''ಶೂನೇಮಿನ
ಸ್ತ್ರೀಯನ್ನು ಕರೆ'' ಎಂದು ಹೇಳಿದನು.

ಗೇಹಜಿಯು ಶೂನೇಮಿನ ಸ್ತ್ರೀಯನ್ನು ಕರೆದನು. ಅವಳು ಎಲೀಷನ ಹತ್ತಿರಕ್ಕೆ ಬಂದಳು. ಎಲೀಷನು, ''ನಿನ್ನ ಮಗನನ್ನು ಎತ್ತಿಕೊ'' ಎಂದು ಹೇಳಿದನು.

[37]ಆಗ ಶೂನೇಮಿನ ಆ ಸ್ತ್ರೀಯು ಕೊಠಡಿಯೊಳಕ್ಕೆ
ಹೋಗಿ, ಎಲೀಷನ ಪಾದಗಳಿಗೆ ಬಾಗಿ ನಮಸ್ಕರಿಸಿದಳು.
ನಂತರ ಅವಳು ತನ್ನ ಮಗನನ್ನು ಎತ್ತಿಕೊಂಡು ಹೊರಗೆ
ಹೋದಳು.

## ಎಲೀಷ ಮತ್ತು ವಿಷದ ಸಾರು

[38]ಎಲೀಷನು ಗಿಲ್ಗಾಲಿಗೆ ಮತ್ತೆ ಬಂದನು. ಆಗ ಆ
ದೇಶದಲ್ಲಿ ಬರಗಾಲವಿತ್ತು. ಪ್ರವಾದಿಗಳ ಗುಂಪು
ಎಲೀಷನ ಎದುರಿನಲ್ಲಿ ಕುಳಿತಿದ್ದರು. ಎಲೀಷನು ತನ್ನ
ಸೇವಕನಿಗೆ, ''ಒಂದು ದೊಡ್ಡ ಪಾತ್ರೆಯನ್ನು ಒಲೆಯ
ಮೇಲಿಟ್ಟು ಪ್ರವಾದಿಗಳ ಗುಂಪಿಗೆಲ್ಲ ಸಾರನ್ನು ಮಾಡು''
ಎಂದು ಹೇಳಿದನು.
[39]ಒಬ್ಬನು ಅಡಿಗೆಯ ಸೊಪ್ಪಿಗಾಗಿ ತೋಟಕ್ಕೆ
ಹೋದನು. ಅಲ್ಲಿ ಅವನು ಒಂದು ಕಾಡುಬಳ್ಳಿಯಿಂದ
ಕಾಡುಸೋರೆಕಾಯಿಗಳನ್ನು ಕಿತ್ತುಕೊಂಡು, ಅವುಗಳನ್ನು
ತನ್ನ ಮೇಲಂಗಿಯ ಜೇಬಿನಲ್ಲಿ ತುಂಬಿಸಿಕೊಂಡನು.
ನಂತರ ಅವನು ಬಂದು, ಆ ಕಾಡುಸೋರೆ ಕಾಯಿಗಳನ್ನು
ಪಾತ್ರೆಯಲ್ಲಿ ಹಾಕಿದನು. ಆದರೆ ಪ್ರವಾದಿಗಳ ಗುಂಪಿಗೆ
ಅವು ಯಾವ ಜಾತಿಯ ಸೋರೆಕಾಯಿಗಳೆಂಬುದು
ತಿಳಿದಿರಲಿಲ್ಲ.
[40]ನಂತರ ಅವರು ಸ್ವಲ್ಪ ಸಾರನ್ನು ಜನರಿಗೆ ತಿನ್ನಲು
ಬಡಿಸಿದರು. ಆದರೆ ಅವರು ಆ ಸಾರನ್ನು ಊಟಮಾಡಲಾ
ರಂಭಿಸಿದಾಗ , ಅವರು, ''ದೇವಮನುಷ್ಯನೇ! ಪಾತ್ರೆ
ಯಲ್ಲಿ ವಿಷವಿದೆ!'' ಎಂದು ಎಲೀಷನನ್ನು ಕೂಗಿ
ಕೊಂಡರು. ಆ ಆಹಾರವು ತಿನ್ನಲು ಯೋಗ್ಯವಾಗಿರಲಿಲ್ಲ
ವಾದುದರಿಂದ ಅವರು ಆ ಪಾತ್ರೆಯಿಂದ ಏನನ್ನೂ
ತಿನ್ನಲಿಲ್ಲ.
[41]ಆದರೆ ಎಲೀಷನು, ''ಸ್ವಲ್ಪ ಹಿಟ್ಟನ್ನು ತನ್ನಿ''ಎಂದು
ಹೇಳಿದನು. ಅವರು ಎಲೀಷನ ಬಳಿಗೆ ಹಿಟ್ಟನ್ನು
ತಂದರು. ಅವನು ಅದನ್ನು ಪಾತ್ರೆಯೊಳಗೆ ಹಾಕಿದನು.
ನಂತರ ಎಲೀಷನು, ''ಜನರಿಗೆ ಸಾರನ್ನು ಬಡಿಸಿ, ಅವರು
ಊಟಮಾಡಲಿ''ಎಂದು ಹೇಳಿದನು.

ಆಗ ಆ ಸಾರಿನಲ್ಲಿ ಯಾವ ದೋಷವು ಇರಲಿಲ್ಲ.

## ಎಲೀಷನು ಪ್ರವಾದಿಗಳ ಗುಂಪಿಗೆ ಊಟ ಒದಗಿಸಿದನು

[42]ಬಾಳ್‌ಷಾಲಿಷಾದಿಂದ ಒಬ್ಬ ಮನುಷ್ಯನು ಪ್ರಥಮ
ಸುಗ್ಗಿಯ ರೊಟ್ಟಿಗಳನ್ನು ದೇವಮನುಷ್ಯನಿಗೆ (ಎಲೀ
ಷನಿಗೆ) ತೆಗೆದುಕೊಂಡು ಬಂದನು. ಇವನು ಇಪ್ಪತ್ತು
ಜವೆಗೋಧಿ ರೊಟ್ಟಿಗಳನ್ನೂ ಒಂದು ಚೀಲದಲ್ಲಿ ಹಸೀ
ತೆನೆಗಳನ್ನೂ ತಂದನು. ಆಗ ಎಲೀಷನು, ''ಜನರಿಗೆ ಈ
ಆಹಾರವನ್ನು ಕೊಡು, ಅವರು ತಿನ್ನಲಿ'' ಎಂದು
ಹೇಳಿದನು.
[43]ಎಲೀಷನ ಸೇವಕನು, ''ಏನು? ಇಲ್ಲಿ ನೂರು ಮಂದಿ
ಜನರಿದ್ದಾರೆ. ಈ ಆಹಾರವನ್ನು ಇಲ್ಲಿರುವ ಜನರಿಗೆಲ್ಲ
ನಾನು ಹೇಗೆ ಕೊಡಲಿ?'' ಎಂದನು.

ಆದರೆ ಎಲೀಷನು, ''ಜನರಿಗೆ ತಿನ್ನಲು ಆಹಾರವನ್ನು ಕೊಡು, ಯೆಹೋವನು ಇಂತೆನ್ನುವನು; 'ಅವರು ತಿಂದರೂ ಆಹಾರವು ಉಳಿಯುತ್ತದೆ' '' ಎಂದು ಹೇಳಿದನು.

[44]ಆಗ ಎಲೀಷನ ಸೇವಕನು ಪ್ರವಾದಿಗಳ ಗುಂಪಿನ
ಮುಂದೆ ಆಹಾರವನ್ನು ಇಟ್ಟನು. ಆ ಗುಂಪಿನ ಪ್ರವಾದಿ
ಗಳು ಸಾಕಾಗುವಷ್ಟು ತಿಂದರೂ ಆಹಾರವು ಉಳಿದು
ಹೋಯಿತು. ಯೆಹೋವನು ಹೇಳಿದಂತೆಯೇ ಇದು
ಸಂಭವಿಸಿತು.

## ನಾಮಾನನ ಸಮಸ್ಯೆ

5 ಅರಾಮ್ಯರ ರಾಜನ ಸೇನೆಯಲ್ಲಿ ನಾಮಾನನೆಂಬ
ಸೇನಾಪತಿಯಿದ್ದನು. ನಾಮಾನನು ಅವನ ರಾಜನಿಗೆ
ಬಹಳ ಪ್ರಮುಖನಾಗಿದ್ದನು. ಯೆಹೋವನು ನಾಮಾನನ
ಮುಖಾಂತರ ಅರಾಮ್ಯರಿಗೆ ವಿಜಯವನ್ನು ತಂದು
ಕೊಟ್ಟಿದ್ದರಿಂದ ಅವನು ಪ್ರಮುಖನಾಗಿದ್ದನು. ನಾಮಾ
ನನು ಮಹಾಪುರುಷನೂ ಶಕ್ತಿಶಾಲಿಯೂ ಆದ ಮನುಷ್ಯ
ನಾಗಿದ್ದನು. ಆದರೆ ಅವನು ಕುಷ್ಠರೋಗ ಪೀಡಿತ
ನಾಗಿದ್ದನು.
[2]ಅರಾಮ್ಯರು ಇಸ್ರೇಲಿನಲ್ಲಿ ಹೋರಾಡಲು ಸೈನಿಕರ
ಅನೇಕ ಗುಂಪುಗಳನ್ನು ಕಳುಹಿಸಿದರು. ಸೈನಿಕರು ಜನ
ರನ್ನು ತಮ್ಮ ಗುಲಾಮರಂತೆ ಹಿಡಿದುತಂದರು. ಒಂದು
ಸಲ ಚಿಕ್ಕ ಹುಡುಗಿಯೊಬ್ಬಳನ್ನು ಇಸ್ರೇಲ್ ದೇಶದಿಂದ
ಹಿಡಿದುತಂದರು. ಈ ಚಿಕ್ಕ ಹುಡುಗಿಯು ನಾಮಾನನ
ಪತ್ನಿಗೆ ಸೇವಕಿಯಾದಳು. [3]ಈ ಹುಡುಗಿಯು ನಾಮಾನನ
ಪತ್ನಿಗೆ, ''ನನ್ನ ಒಡೆಯನಾದ ನಾಮಾನನು ಸಮಾರ್ಯ
ದಲ್ಲಿ ವಾಸಿಸುವ ಪ್ರವಾದಿಯನ್ನು (ಎಲೀಷನನ್ನು) ಭೇಟಿ
ಮಾಡಬೇಕೆಂದು ನಾನು ಆಶಿಸುತ್ತೇನೆ. ಆ ಪ್ರವಾದಿಯು
ನಾಮಾನನ ಕುಷ್ಠರೋಗವನ್ನು ಗುಣಪಡಿಸಬಲ್ಲನು''
ಎಂದು ಹೇಳಿದಳು.
[4]ನಾಮಾನನು ತನ್ನ ಒಡೆಯನಾದ ಅರಾಮ್ಯರ ರಾಜನ
ಬಳಿಗೆ ಹೋದನು. ಇಸ್ರೇಲಿನ ಹುಡುಗಿಯು ಹೇಳಿದ

ಸಂಗತಿಗಳನ್ನು, ನಾಮಾನನು ಅರಾಮ್ಯರ ರಾಜನಿಗೆ
ಹೇಳಿದನು.
5ಆಗ ಅರಾಮ್ಯರ ರಾಜನು, ''ಈಗಲೇ ಹೋಗು,
ನಾನು ಇಸ್ರೇಲಿನ ರಾಜನಿಗೆ ಪತ್ರವೊಂದನ್ನು ಕಳುಹಿ
ಸುತ್ತೇನೆ'' ಎಂದು ಹೇಳಿದನು.

ನಾಮಾನನು ಇಸ್ರೇಲಿಗೆ ಹೋದನು. ನಾಮಾನನು
ಮೂನ್ನೂರ ನಲವತ್ತು ಕಿಲೋ. ಗ್ರಾಂ. ಬೆಳ್ಳಿ, ಆರುಸಾವಿರ
ಚಿನ್ನದ ನಾಣ್ಯಗಳನ್ನು ಮತ್ತು ಹತ್ತು ಥಾನು ಬಟ್ಟೆಗಳನ್ನು
ಕಾಣಿಕೆಯಾಗಿ ತೆಗೆದುಕೊಂಡು ಹೋದನು. 6ನಾಮಾ
ನನು ಅರಾಮ್ಯರ ರಾಜನಿಂದ ಇಸ್ರೇಲ್ ರಾಜನಿಗೆ
ಪತ್ರವೊಂದನ್ನು ತೆಗೆದುಕೊಂಡು ಹೋದನು. ಆ
ಪತ್ರದಲ್ಲಿ, ''... ನನ್ನ ಸೇವಕನಾದ ನಾಮಾನನನ್ನು ನಿಮ್ಮ
ಬಳಿಗೆ ನಾನು ಕಳುಹಿಸುತ್ತಿದ್ದೇನೆ. ಅವನ ಕುಷ್ಠ
ರೋಗವನ್ನು ಗುಣಪಡಿಸಿ'' ಎಂದು ಬರೆದಿತ್ತು.
7ಇಸ್ರೇಲಿನ ರಾಜನು ಪತ್ರವನ್ನು ಓದಿದಾಗ, ದುಃಖ
ದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು,''ನಾನು
ದೇವರೇನು ? ಇಲ್ಲ! ಹುಟ್ಟು ಮತ್ತು ಸಾವುಗಳ ಮೇಲೆ
ನನಗೆ ಯಾವ ಶಕ್ತಿಯೂ ಇಲ್ಲ. ಹೀಗಿರುವಾಗ ಅರಾಮ್ಯರ
ರಾಜನು ಕುಷ್ಠರೋಗ ಪೀಡಿತನಾದ ಮನುಷ್ಯನನ್ನು ನನ್ನ
ಬಳಿಗೆ ಗುಣಪಡಿಸಲು ಏಕೆ ಕಳುಹಿಸಿದನು? ಇದರ ಬಗ್ಗೆ
ನೀವೇ ಯೋಚಿಸಿರಿ. ಇದು ಒಂದು ಕುತಂತ್ರವೆಂಬುದು
ನಿಮಗೇ ತಿಳಿಯುತ್ತದೆ. ಅರಾಮ್ಯರ ರಾಜನು ಯುದ್ಧ
ವನ್ನು ಆರಂಭಿಸಲು ಪ್ರಯತ್ನಿಸುತ್ತಿದ್ದಾನೆ!'' ಎಂದು
ಹೇಳಿದನು.
8ಇಸ್ರೇಲಿನ ರಾಜನು ದುಃಖದಿಂದ ತನ್ನ ಬಟ್ಟೆಗಳನ್ನು
ಹರಿದುಕೊಂಡನೆಂಬುದು ದೇವಮನುಷ್ಯನಾದ ಎಲೀಷ
ನಿಗೆ ತಿಳಿಯಿತು. ಎಲೀಷನು ರಾಜನಿಗೆ ಈ ಸಂದೇಶವನ್ನು
ಕಳುಹಿಸಿದನು: ''ನೀನು ನಿನ್ನ ಬಟ್ಟೆಗಳನ್ನು ಹರಿದು
ಕೊಂಡಿದ್ದು ಏಕೆ? ನಾಮಾನನು ನನ್ನ ಬಳಿಗೆ ಬರಲಿ.
ಇಸ್ರೇಲಿನಲ್ಲಿ ಒಬ್ಬ ಪ್ರವಾದಿ ಇದ್ದಾನೆಂಬುದು ಅವನಿಗೆ
ತಿಳಿಯುತ್ತದೆ!''
9ನಾಮಾನನು ತನ್ನ ಕುದುರೆಗಳೊಂದಿಗೆ ಮತ್ತು
ರಥಗಳೊಂದಿಗೆ ಎಲೀಷನ ಮನೆಗೆ ಬಂದು, ಬಾಗಿಲಿನ
ಹೊರಗಡೆ ನಿಂತುಕೊಂಡನು. 10ಎಲೀಷನು ತನ್ನ ಸಂದೇ
ಶಕನ ಮೂಲಕ ನಾಮಾನನಿಗೆ, ''ಹೋಗಿ, ಜೋರ್ಡನ್
ನದಿಯಲ್ಲಿ ಏಳು ಸಲ ಸ್ನಾನಮಾಡು. ಆಗ ನಿನ್ನ ಚರ್ಮ
ರೋಗವು ಗುಣವಾಗುವುದು. ನೀನು ಸಂಪೂರ್ಣ
ಶುದ್ಧನಾಗುವೆ'' ಎಂದು ತಿಳಿಸಿದನು.
11ನಾಮಾನನು ಕೋಪಗೊಂಡು, ''ಎಲೀಷನು
ಕೊನೆಯ ಪಕ್ಷ ಬಂದು, ನನ್ನೆದುರು ನಿಂತು, ತನ್ನ ದೇವ
ರಾದ ಯೆಹೋವನ ಹೆಸರಿನಲ್ಲಿ ನನ್ನನ್ನು ಕರೆಯುತ್ತಿದ್ದ
ನೆಂದು ನಾನು ಭಾವಿಸಿದ್ದೆನು. ಅವನು ತನ್ನ ಕೈಗಳನ್ನು ನನ್ನ
ದೇಹದ ಮೇಲೆ ಸವರಿ, ನನ್ನ ಕುಷ್ಠರೋಗವನ್ನು
ಗುಣಪಡಿಸುವನೆಂದು ನಾನು ಭಾವಿಸಿದ್ದೆನು. 12ದಮಸ್ಕದ
ಅಬಾನಾ ಮತ್ತು ಪರ್ಪರ್ ನದಿಗಳು ಇಸ್ರೇಲಿನ ಎಲ್ಲಾ
ನದಿಗಳಿಗಿಂತಲೂ ಉತ್ತಮ! ನಾನು ದಮಸ್ಕದ ಆ ನದಿ
ಗಳಲ್ಲಿ ಸ್ನಾನಮಾಡಿ, ಶುದ್ಧನಾಗಬಾರದೇಕೆ?'' ಎಂದು
ಕೊಂಡು ಕೋಪದಿಂದ ಹಿಂದಿರುಗಿ ಹೋದನು!
13ಆಗ ನಾಮಾನನ ಸೇವಕರು ಅವನ ಬಳಿಗೆ ಬಂದು
ಅವನಿಗೆ ''ತಂದೆಯೇ, ಪ್ರವಾದಿಯು ಒಂದು ಕಠಿಣವಾದ
ಕಾರ್ಯವನ್ನು ಹೇಳಿದ್ದರೆ, ನೀವು ಅದನ್ನು ಮಾಡುತ್ತಿದ್ದಿರಿ!
ಅಲ್ಲವೇ? ಹೀಗಿರಲು ಸುಲಭವಾದ ಒಂದು ಕಾರ್ಯ
ವನ್ನು ಅವನು ನಿಮಗೆ ಹೇಳಿರುವಾಗ ನೀವು ಅವನಿಗೆ
ವಿಧೇಯರಾಗಬಾರದೇಕೆ? ನೀವು ಸ್ನಾನಮಾಡಿದರೆ,
ಶುಚಿಗೊಂಡು ಶುದ್ಧರಾಗುವಿರಿ' ಎಂದು ಹೇಳಿದರು.
14ದೇವಮನುಷ್ಯನು (ಎಲೀಷನು) ಹೇಳಿದಂತೆಯೇ
ನಾಮಾನನು ಜೋರ್ಡನ್ ನದಿಯಲ್ಲಿ ಇಳಿದು ಏಳು
ಸಾರಿ ಮುಳುಗಿ ಮೇಲೆದ್ದನು. ಆಗ ನಾಮಾನನು
ಸಂಪೂರ್ಣ ಶುದ್ಧನಾದನು; ಅವನ ಚರ್ಮವು ಮಗುವಿನ
ಚರ್ಮದಂತೆ ಕೋಮಲವಾಯಿತು.
15ನಾಮಾನನು ತನ್ನ ಗುಂಪಿನೊಂದಿಗೆ ದೇವಮನುಷ್ಯನ
ಹತ್ತಿರಕ್ಕೆ ಹಿಂದಿರುಗಿ ಬಂದನು. ಅವನು ಎಲೀಷನ
ಮುಂದೆ ನಿಂತು,'' ನೋಡಿ, ಇಸ್ರೇಲಿನಲ್ಲಿಯೇ ಹೊರತು
ಭೂಮಂಡಲದ ಬೇರೆಲ್ಲಿಯೂ ದೇವರು ಇಲ್ಲವೇ ಇಲ್ಲ
ಎಂಬುದು ಈಗತಾನೇ ನನಗೆ ತಿಳಿಯಿತು! ಈಗ
ದಯಮಾಡಿ ನನ್ನ ಕಾಣಿಕೆಯನ್ನು ಸ್ವೀಕರಿಸಿ!'' ಎಂದು
ಹೇಳಿದನು.
16ಆದರೆ ಎಲೀಷನು, ''ನಾನು ಯೆಹೋವನ ಸೇವೆ
ಮಾಡುತ್ತೇನೆ. ಯೆಹೋವನಾಣೆಯಾಗಿ ಪ್ರಮಾಣ
ಮಾಡುತ್ತೇನೆ. ನಾನು ಯಾವ ಕಾಣಿಕೆಯನ್ನು ಸ್ವೀಕರಿಸು
ವುದಿಲ್ಲ'' ಎಂದು ಹೇಳಿದನು.

ಎಲೀಷನು ಕಾಣಿಕೆಯನ್ನು ಸ್ವೀಕರಿಸುವಂತೆ ನಾಮಾ
ನನು ಬಹಳ ಪ್ರಯತ್ನಿಸಿದನು. ಆದರೆ ಎಲೀಷನು
ನಿರಾಕರಿಸಿದನು. 17ಆಗ ನಾಮಾನನು, ''ನೀನು ಈ
ಕಾಣಿಕೆಯನ್ನು ಸ್ವೀಕರಿಸದಿದ್ದರೆ, ಕೊನೆಯ ಪಕ್ಷ ನನಗಾಗಿ
ಈ ಕಾರ್ಯವನ್ನು ಮಾಡು. ನನ್ನ ಎರಡು ಹೇಸರಕತ್ತೆಗಳ
ಮೇಲಿನ ಬುಟ್ಟಿಗಳು ತುಂಬುವಷ್ಟು ಇಸ್ರೇಲಿನ ಮಣ್ಣನ್ನು
ನನಗೆ ಕೊಡಿಸಬೇಕೆಂದು ಬೇಡುತ್ತೇನೆ. ಏಕೆಂದರೆ ಇತರ
ದೇವರುಗಳಿಗೆ ನಾನು ಮತ್ತೆ ಎಂದೆಂದಿಗೂ ಸರ್ವಾಂಗ
ಹೋಮವನ್ನಾಗಲೀ, ಯಜ್ಞಗಳನ್ನಾಗಲೀ ಅರ್ಪಿಸುವು
ದಿಲ್ಲ. ನಾನು ಯೆಹೋವನಿಗೆ ಮಾತ್ರ ಯಜ್ಞಗಳನ್ನು
ಅರ್ಪಿಸುತ್ತೇನೆ! 18ಆದರೆ ಈ ವಿಷಯದಲ್ಲಿ ಯೆಹೋವನು
ನನ್ನನ್ನು ಕ್ಷಮಿಸಲಿ. ನನ್ನ ಒಡೆಯನು (ಅರಾಮ್ಯರ ರಾಜ)
ಸುಳ್ಳುದೇವರಾದ ರಿಮ್ಮೋನನನ್ನು ಪೂಜಿಸಲು ಅವನ
ಆಲಯಕ್ಕೆ ಹೋಗಿ ನನ್ನ ಕೈಹಿಡಿದು ಆ ದೇವರಿಗೆ
ನಮಸ್ಕಾರ ಮಾಡುವಾಗ ನಾನೂ ನಮಸ್ಕಾರ

ಮಾಡಬೇಕಾಗುವುದು. ಈ ಒಂದು ವಿಷಯದಲ್ಲಿ
ಯೆಹೋವನು ನನಗೆ ಕ್ಷಮೆಯನ್ನು ಅನುಗ್ರಹಿಸಬೇಕು''
ಎಂದು ಹೇಳಿದನು. [19]ಆಗ ಎಲೀಷನು, ''ಸಮಾಧಾನ
ದಿಂದ ಹೋಗು'' ಎಂದನು.

ನಾಮಾನನು ಎಲೀಷನ ಬಳಿಯಿಂದ ಸ್ವಲ್ಪ ದೂರ
ಹೋದನು. [20]ಆದರೆ ದೇವಮನುಷ್ಯನಾದ ಎಲೀಷನ
ಸೇವಕನಾದ ಗೇಹಜಿಯು, ''ನೋಡು, ಅರಾಮ್ಯನಾದ
ನಾಮಾನನು ತಂದಿದ್ದ ಕಾಣಿಕೆಯನ್ನು ಸ್ವೀಕರಿಸದೆ ನನ್ನ
ಒಡೆಯನು (ಎಲೀಷನು) ಅವನನ್ನು ಕಳುಹಿಸಿಬಿಟ್ಟನು!
ಯೆಹೋವನಾಣೆಯಾಗಿ, ನಾನು ನಾಮಾನನ ಹಿಂದೆ
ಓಡಿಹೋಗಿ ಅವನಿಂದ ಏನನ್ನಾದರೂ ಪಡೆಯುತ್ತೇನೆ!''
ಎಂದು ತನ್ನೊಳಗೆ ಅಂದುಕೊಂಡನು, [21]ನಾಮಾನನ
ಬಳಿಗೆ ಓಡಿದನು. ನಾಮಾನನು ತನ್ನ ಹಿಂದೆ ಓಡಿ
ಬರುತ್ತಿರುವ ಒಬ್ಬನನ್ನು ನೋಡಿ ಗೇಹಜಿಯನ್ನು ಸಂಧಿ
ಸಲು ರಥದಿಂದ ಇಳಿದನು. ನಾಮಾನನು, ''ಎಲ್ಲವೂ
ಕ್ಷೇಮವೇ?'' ಎಂದು ಕೇಳಿದನು.

[22]ಗೇಹಜಿಯು,''ಹೌದು, ಎಲ್ಲವೂ ಕ್ಷೇಮವಾಗಿದೆ.
ನನ್ನ ಒಡೆಯನು (ಎಲೀಷನು) ನನಗೆ, 'ನೋಡು, ಎಫ್ರಾ
ಯೀಮ್ ಬೆಟ್ಟಪ್ರಾಂತ್ಯದ ಪ್ರವಾದಿಗಳ ಗುಂಪಿನಿಂದ ನನ್ನ
ಬಳಿಗೆ ಇಬ್ಬರು ತರುಣರು ಬಂದಿದ್ದಾರೆ. ದಯವಿಟ್ಟು
ಅವರಿಗೆ ಮೂವತ್ತೈದು ಕಿಲೋ. ಗ್ರಾಂ. ಬೆಳ್ಳಿಯನ್ನು
ಮತ್ತು ಎರಡು ಥಾನು ಬಟ್ಟೆಯನ್ನು ತೆಗೆದುಕೊಂಡು ಬಾ'
ಎಂದು ನನ್ನನ್ನು ಕಳುಹಿಸಿದನು'' ಎಂದು ಹೇಳಿದನು.

[23]ನಾಮಾನನು, ''ದಯಮಾಡಿ ಎಪ್ಪತ್ತು ಕಿಲೋ.
ಗ್ರಾಂ. ತೆಗೆದುಕೊ!'' ಎಂದು ಗೇಹಜಿಗೆ ಒತ್ತಾಯಪಡಿಸಿ
ಎಪ್ಪತ್ತು ಕಿಲೋ ಗ್ರಾಂ ಬೆಳ್ಳಿಯನ್ನು ಎರಡು ಚೀಲಗಳಲ್ಲಿ
ಹಾಕಿದನು ಮತ್ತು ಎರಡು ಥಾನು ಬಟ್ಟೆಯನ್ನು
ತೆಗೆದುಕೊಂಡು ತನ್ನ ಸೇವಕರಿಗೆ ಕೊಟ್ಟನು. ಆ ಸೇವಕರು
ಈ ವಸ್ತುಗಳನ್ನು ತೆಗೆದುಕೊಂಡು ಗೇಹಜಿಯೊಡನೆ
ಹೋದರು. [24]ಗೇಹಜಿಯು ಬೆಟ್ಟಕ್ಕೆ ಬಂದಾಗ, ಅವುಗ
ಳನ್ನು ಸೇವಕರಿಂದ ತೆಗೆದುಕೊಂಡು ಅವರನ್ನು ಕಳುಹಿಸಿ
ಬಿಟ್ಟನು. ನಂತರ ಗೇಹಜಿಯು ಅವುಗಳನ್ನು ಮನೆಯಲ್ಲಿ
ಅಡಗಿಸಿಟ್ಟನು.

[25]ಗೇಹಜಿಯು ಒಳಗೆ ಬಂದು ತನ್ನ ಒಡೆಯನಾದ
ಎಲೀಷನ ಮುಂದೆ ನಿಂತುಕೊಂಡನು. ಎಲೀಷನು
ಗೇಹಜಿಗೆ, ''ನೀನು ಎಲ್ಲಿಗೆ ಹೋಗಿದ್ದೆ?'' ಎಂದು
ಕೇಳಿದನು.

ಗೇಹಜಿಯು, ''ನಾನು ಎಲ್ಲಿಗೂ ಹೋಗಿರಲಿಲ್ಲ''
ಎಂದನು.

[26]ಎಲೀಷನು ಗೇಹಜಿಗೆ, ''ಅದು ನಿಜವಲ್ಲ! ನಾಮಾ
ನನು ನಿನ್ನನ್ನು ಸಂಧಿಸಲು ತನ್ನ ರಥದಿಂದ ಹಿಂದಕ್ಕೆ
ತಿರುಗಿದಾಗ ನನ್ನ ಹೃದಯವು ನಿನ್ನ ಹತ್ತಿರದಲ್ಲಿಯೇ
ಇತ್ತು. ಹಣವನ್ನು, ಬಟ್ಟೆಗಳನ್ನು, ಆಲೀವನ್ನು ದ್ರಾಕ್ಷಿ
ಯನ್ನು, ಕುರಿಗಳನ್ನು, ಹಸುಗಳನ್ನು ಅಥವಾ ಸೇವಕ
ಸೇವಕಿಯರನ್ನು ತೆಗೆದುಕೊಳ್ಳುವ ಕಾಲ ಇದಲ್ಲ. [27]ಈಗ,
ನಿನ್ನನ್ನು ಮತ್ತು ನಿನ್ನ ಮಕ್ಕಳನ್ನು ನಾಮಾನನ ರೋಗವು
ಹಿಡಿದುಕೊಳ್ಳುವುದು. ನಿನಗೆ ಎಂದೆಂದಿಗೂ ಕುಷ್ಠರೋಗ
ವಿರುವುದು!'' ಎಂದು ಹೇಳಿದನು.

ಗೇಹಜಿಯು ಎಲೀಷನನ್ನು ಬಿಟ್ಟುಹೋದಾಗ, ಗೇಹ
ಜಿಯ ಚರ್ಮವು ಮಂಜುಗಡ್ಡೆಯಂತೆ ಬಿಳುಪಾಯಿತು!
ಗೇಹಜಿಯು ಕುಷ್ಠರೋಗ ಪೀಡಿತನಾದನು.

### ಎಲೀಷ ಮತ್ತು ಕೊಡಲಿ

6 ಪ್ರವಾದಿಗಳ ಗುಂಪು ಎಲೀಷನಿಗೆ, ''ನಾವು ಈ
ಸ್ಥಳದಲ್ಲಿಯೇ ವಾಸಮಾಡುತ್ತಿದ್ದೇವೆ. ಆದರೆ ಇದು
ನಮಗೆ ತುಂಬಾ ಚಿಕ್ಕದಾಗಿದೆ. [2]ನಾವೆಲ್ಲ ಜೋರ್ಡನ್
ನದಿಗೆ ಹೋಗಿ ಸ್ವಲ್ಪ ಮರವನ್ನು ಕಡಿದುಕೊಂಡು
ಬರೋಣ. ಪ್ರತಿಯೊಬ್ಬರೂ ಒಂದೊಂದು ದಿಮ್ಮಿಯನ್ನು
ತಂದು ನಾವು ವಾಸಿಸಲು ಒಂದು ಮನೆಯನ್ನು
ಕಟ್ಟೋಣ'' ಎಂದು ಹೇಳಿದರು. ಎಲೀಷನು, ''ಸರಿ,
ಹಾಗೆಯೇ ಮಾಡಿ''ಎಂದು ಉತ್ತರಿಸಿದನು.

[3]ಒಬ್ಬ ವ್ಯಕ್ತಿಯು, ''ದಯವಿಟ್ಟು ನಮ್ಮ ಜೊತೆಯಲ್ಲಿ
ನೀನೂ ಬಾ''ಎಂದನು. ಎಲೀಷನು, ''ಸರಿ, ನಾನೂ
ನಿಮ್ಮ ಜೊತೆಯಲ್ಲಿ ಬರುತ್ತೇನೆ'' ಎಂದು ಹೇಳಿದನು.

[4]ಎಲೀಷನು ಪ್ರವಾದಿಗಳ ಗುಂಪಿನೊಂದಿಗೆ
ಹೋದನು. ಅವರು ಜೋರ್ಡನ್ ನದಿಯ ಬಳಿಗೆ
ಬಂದು ಕೆಲವು ಮರಗಳನ್ನು ಕಡಿಯಲಾರಂಭಿಸಿದರು.
[5]ಆದರೆ ಒಬ್ಬನು ಮರವೊಂದನ್ನು ಕಡಿದುರುಳಿಸಿದಾಗ,
ಕಬ್ಬಿಣದ ಕೊಡಲಿಯು ಕಾವುನಿಂದ ಕಳಚಿಕೊಂಡು
ನೀರಿನೊಳಕ್ಕೆ ಬಿದ್ದುಬಿಟ್ಟಿತು. ಆ ಮನುಷ್ಯನು, ''ಅಯ್ಯೋ
ಒಡೆಯನೇ! ನಾನು ಆ ಕೊಡಲಿಯನ್ನು ಎರವಲಾಗಿ
ತಂದಿದ್ದೇನಲ್ಲಾ'' ಎಂದು ಕೂಗಿಕೊಂಡನು.

[6]ದೇವಮನುಷ್ಯನು (ಎಲೀಷನು), ''ಅದು ಎಲ್ಲಿ
ಬಿದ್ದಿತು!'' ಎಂದು ಕೇಳಿದನು.

ಆ ಮನುಷ್ಯನು ಕೊಡಲಿಯು ಬಿದ್ದ ಸ್ಥಳವನ್ನು ಎಲೀಷ
ನಿಗೆ ತೋರಿಸಿದನು. ಆಗ ಎಲೀಷನು ಒಂದು ಕಡ್ಡಿಯನ್ನು
ಮುರಿದು ಅದನ್ನು ನೀರಿನೊಳಕ್ಕೆ ಎಸೆದನು. ಆ ಕಡ್ಡಿಯು
ಕಬ್ಬಿಣದ ಕೊಡಲಿಯನ್ನು ತೇಲುವಂತೆ ಮಾಡಿತು.
[7]ಎಲೀಷನು, ''ಕೊಡಲಿಯನ್ನು ಎತ್ತಿಕೊ'' ಎಂದು ಹೇಳಿ
ದನು. ಆ ಮನುಷ್ಯನು ಅಲ್ಲಿಗೆ ಹೋಗಿ, ಕೊಡಲಿಯನ್ನು
ತೆಗೆದುಕೊಂಡನು.

### ಅರಾಮ್ಯರ ರಾಜನು ಇಸ್ರೇಲಿನ ರಾಜನನ್ನು ಸಿಕ್ಕಿಹಾಕಿಸಲು ಪ್ರಯತ್ನಿಸಿದನು

[8]ಅರಾಮ್ಯರ ರಾಜನು ಇಸ್ರೇಲಿನ ವಿರುದ್ಧ ಯುದ್ಧ
ಮಾಡಲು ಬಂದನು. ಅವನು ತನ್ನ ಸೇನಾಧಿಕಾರಿಗಳ

ಸಭೆಸೇರಿಸಿ, ‘‘ನೀವು ಈ ಜಾಗದಲ್ಲಿ ಅಡಗಿಕೊಂಡಿದ್ದು,
ಇಸ್ರೇಲರು ಇಲ್ಲಿಗೆ ಬಂದಾಗ ಅವರ ಮೇಲೆ ಆಕ್ರಮಣ
ಮಾಡಿ’’ ಎಂದು ಹೇಳಿದನು.

9 ಆದರೆ ದೇವಮನುಷ್ಯನು (ಎಲೀಷನು) ಇಸ್ರೇಲಿನ
ರಾಜನಿಗೆ ಒಂದು ಸಂದೇಶವನ್ನು ಕಳುಹಿಸಿ, ‘‘ನೀವು
ಜಾಗರೂಕರಾಗಿರಿ! ನೀವು ಆ ಜಾಗದಲ್ಲಿ ತಿರುಗಾಡದಿರಿ!
ಅರಾಮ್ಯರ ಸೈನಿಕರು ಅಲ್ಲಿ ಅಡಗಿದ್ದಾರೆ!’’ ಎಂದು
ಹೇಳಿದನು. 10 ಇಸ್ರೇಲಿನ ರಾಜನು ತನ್ನ ಜನರಿಗೆ ಸಂದೇಶ
ವೊಂದನ್ನು ಕಳುಹಿಸಿ, ದೇವಮನುಷ್ಯನು ಎಚ್ಚರ
ವಾಗಿರಲು ತಿಳಿಸಿದ ಸ್ಥಳದಲ್ಲಿ ತಿರುಗಾಡದಿರುವಂತೆ
ಸೂಚಿಸಿ ಕೆಲವು ಜನರನ್ನು * ರಕ್ಷಿಸಿದನು.

11 ಅರಾಮ್ಯರ ರಾಜನು ಇದರಿಂದ ಬಹಳ ತಳಮಳ
ಗೊಂಡನು. ಅರಾಮ್ಯರ ರಾಜನು ತನ್ನ ಸೇನಾಧಿಕಾರಿ
ಗಳನ್ನು ಕರೆದು ಅವರಿಗೆ, ‘‘ಇಸ್ರೇಲಿನ ರಾಜನಿಗಾಗಿ
ಗೂಢಚರ್ಯೆ ನಡೆಸುತ್ತಿರುವವರು ಯಾರೆಂಬುದನ್ನು
ಹೇಳಿ’’ ಎಂದು ಕೇಳಿದನು.

12 ಅರಾಮ್ಯರ ರಾಜನ ಅಧಿಕಾರಿಗಳಲ್ಲೊಬ್ಬನು, ‘‘ನನ್ನ
ಒಡೆಯನೇ, ರಾಜನೇ, ನಮ್ಮಲ್ಲಿ ಯಾರೊಬ್ಬರೂ ಗೂಢ
ಚಾರರಲ್ಲ. ಇಸ್ರೇಲಿನ ಪ್ರವಾದಿಯಾದ ಎಲೀಷನು
ಅನೇಕ ರಹಸ್ಯ ಸಂಗತಿಗಳನ್ನು ಅಂದರೆ ನೀವು ನಿಮ್ಮ
ಮಲಗುವ ಕೊಠಡಿಯಲ್ಲಿ ಮಾತನಾಡುವುದನ್ನೂ ಸಹ
ಇಸ್ರೇಲಿನ ರಾಜನಿಗೆ ತಿಳಿಸಬಲ್ಲವನಾಗಿದ್ದಾನೆ!’’ ಎಂದು
ಹೇಳಿದನು.

13 ಅರಾಮ್ಯರ ರಾಜನು, ‘‘ಎಲೀಷನನ್ನು ಕಂಡು
ಹಿಡಿಯಿರಿ. ಅವನನ್ನು ಸೆರೆಹಿಡಿಯಲು ನಾನು ಸೈನಿಕರನ್ನು
ಕಳುಹಿಸುತ್ತೇನೆ’’ ಎಂದನು.

ಸೇವಕರು ಅರಾಮ್ಯರ ರಾಜನಿಗೆ, ‘‘ಎಲೀಷನು
ದೋತಾನಿನಲ್ಲಿದ್ದಾನೆ’’ ಎಂದು ಹೇಳಿದರು.

14 ಆಗ ಅರಾಮ್ಯರ ರಾಜನು ಕುದುರೆಗಳನ್ನು,
ರಥಗಳನ್ನು ಮತ್ತು ದೊಡ್ಡ ಸೇನೆಯನ್ನು ದೋತಾನಿಗೆ
ಕಳುಹಿಸಿದನು. ಅವರು ರಾತ್ರಿಯಲ್ಲಿ ಬಂದು ನಗರವನ್ನು
ಸುತ್ತುವರಿದರು. 15 ಎಲೀಷನ ಸೇವಕನು ಹೊತ್ತಾರೆ ನಸುಕಿ
ನಲ್ಲಿಯೆ ಮೇಲೆಕ್ಕೆದ್ದನು. ಸೇವಕನು ಹೊರಕ್ಕೆ ಹೋದಾಗ
ರಥಗಳಿಂದ ಮತ್ತು ಕುದುರೆಗಳಿಂದ ಕೂಡಿದ ಸೈನ್ಯವು
ನಗರವನ್ನು ಸುತ್ತುವರಿದಿರುವುದನ್ನು ನೋಡಿದನು!

ಆ ಸೇವಕನು ಎಲೀಷನಿಗೆ, ‘‘ಅಯ್ಯೋ, ನನ್ನ
ಒಡೆಯನೇ, ನಾವು ಈಗ ಏನು ಮಾಡೋಣ?’’ಎಂದು
ಕೇಳಿದನು.

16 ಎಲೀಷನು, ‘‘ನೀನು ಹೆದರದಿರು! ನಮಗಾಗಿ
ಯುದ್ಧ ಮಾಡುವ ಸೇನೆಯು ಅರಾಮ್ಯರಿಗಾಗಿ ಯುದ್ಧ
ಮಾಡುವ ಸೇನೆಗಿಂತ ಬಹಳ ಹೆಚ್ಚಿನದಾಗಿದೆ!’’ಎಂದು
ಹೇಳಿದನು.

17 ನಂತರ ಎಲೀಷನು ಪ್ರಾರ್ಥಿಸುತ್ತಾ, ‘‘ಯೆಹೋ
ವನೇ, ನನ್ನ ಸೇವಕನ ಕಣ್ಣುಗಳನ್ನು ತೆರೆದು ಅವನೂ
ನೋಡುವಂತೆ ಮಾಡೆಂದು ನಾನು ನಿನ್ನನ್ನು ಬೇಡಿ
ಕೊಳ್ಳುತ್ತೇನೆ’’ಎಂದು ಹೇಳಿದನು.

ಯೆಹೋವನು ತರುಣನ ಕಣ್ಣುಗಳನ್ನು ತೆರೆದನು. ಆ
ಸೇವಕನು ಪರ್ವತವನ್ನು ತುಂಬಿರುವ ಬೆಂಕಿಯಂತಿರುವ
ಕುದುರೆಗಳನ್ನು ಮತ್ತು ರಥಗಳನ್ನು ನೋಡಿದನು. ಅವ
ರೆಲ್ಲ ಎಲೀಷನ ಸುತ್ತಲೂ ಇದ್ದರು!

18 ಆ ಬೆಂಕಿಯಂತಿರುವ ಕುದುರೆಗಳು ಮತ್ತು ರಥಗಳು
ಎಲೀಷನ ಬಳಿಗೆ ಇಳಿದುಬಂದವು. ಎಲೀಷನು ಯೆಹೋ
ವನನ್ನು ಪ್ರಾರ್ಥಿಸಿ, ‘‘ಈ ಜನರನ್ನು ಕುರುಡರನ್ನಾಗಿ
ಮಾಡ ಬೇಕೆಂದು ನಾನು ನಿನ್ನಲ್ಲಿ ಪ್ರಾರ್ಥಿಸು
ತ್ತೇನೆ’’ಎಂದು ಹೇಳಿದನು.

ಆಗ ಯೆಹೋವನು ಎಲೀಷನ ಪ್ರಾರ್ಥನೆಯಂತೆ
ಅರಾಮ್ಯರ ಸೇನೆಯು ಕುರುಡರಾಗುವಂತೆ ಮಾಡಿದನು.

19 ಎಲೀಷನು ಅರಾಮ್ಯರ ಸೇನೆಗೆ, ‘‘ಇದು ಸರಿಯಾದ
ಮಾರ್ಗವಲ್ಲ, ಇದು ಸರಿಯಾದ ನಗರವೂ ಅಲ್ಲ. ನನ್ನನ್ನು
ಹಿಂಬಾಲಿಸಿ. ನೀವು ಹುಡುಕುತ್ತಿರುವ ಮನುಷ್ಯನ ಬಳಿಗೆ
ನಾನು ನಿಮ್ಮನ್ನು ಕರೆದೊಯ್ಯುತ್ತೇನೆ’’ ಎಂದು ಹೇಳಿ
ದನು. ನಂತರ ಎಲೀಷನು ಅರಾಮ್ಯರ ಸೇನೆಯನ್ನು
ಸಮಾರ್ಯಕ್ಕೆ ನಡೆಸಿಕೊಂಡು ಬಂದನು.

20 ಅವರು ಸಮಾರ್ಯಕ್ಕೆ ಬಂದು ಸೇರಿದಾಗ
ಎಲೀಷನು, ‘‘ಯೆಹೋವನೇ, ಈ ಜನರ ಕಣ್ಣುಗಳನ್ನು
ತೆರೆದುಬಿಡು, ಅವರು ನೋಡಲಿ’’ಎಂದು ಹೇಳಿದನು.

ಆಗ ಯೆಹೋವನು ಅವರ ಕಣ್ಣುಗಳನ್ನು ತೆರೆದನು.
ಅರಾಮ್ಯರ ಸೇನೆಗೆ ತಾವು ಸಮಾರ್ಯ ನಗರದಲ್ಲಿರು
ವುದು ತಿಳಿದುಬಂತು! 21 ಅರಾಮ್ಯರ ಸೇನೆಯನ್ನು
ಇಸ್ರೇಲಿನ ರಾಜನು ನೋಡಿ ಎಲೀಷನಿಗೆ, ‘‘ನನ್ನ
ತಂದೆಯೇ, ನಾನು ಅವರನ್ನು ಕೊಲ್ಲಲೇ? ಅವರನ್ನು
ಕೊಂದುಹಾಕಿಬಿಡಲೇ?’’ ಎಂದು ಕೇಳಿದನು.

22 ಎಲೀಷನು, ‘‘ಬೇಡ, ಅವರನ್ನು ಕೊಲ್ಲಬೇಡ.
ನೀನು ಯುದ್ಧದಲ್ಲಿ, ನಿನ್ನ ಖಡ್ಗದಿಂದ, ನಿನ್ನ ಬಿಲ್ಲು
ಬಾಣಗಳಿಂದ ಸೆರೆಹಿಡಿದ ಜನರನ್ನು ಕೊಲ್ಲಬಾರದು.
ಅರಾಮ್ಯರ ಸೇನೆಗೆ ಸ್ವಲ್ಪ ನೀರನ್ನು ಮತ್ತು ರೊಟ್ಟಿಗಳನ್ನು
ಕೊಡು. ಅವರು ತಿಂದು, ನೀರು ಕುಡಿಯಲಿ. ನಂತರ
ಅವರು ತಮ್ಮ ಮನೆಗೆ, ಅವರ ಒಡೆಯನ ಬಳಿಗೆ
ಹೋಗಲಿ’’ ಎಂದು ಉತ್ತರಿಸಿದನು.

23 ಇಸ್ರೇಲಿನ ರಾಜನು ಅರಾಮ್ಯರ ಸೇನೆಗೆ ಆಹಾರ
ವನ್ನು ಹೇರಳವಾಗಿ ಸಿದ್ಧಪಡಿಸಿದನು. ಅರಾಮ್ಯರ
ಸೇನೆಯು ಊಟಮಾಡಿ, ನೀರನ್ನು ಕುಡಿದರು. ನಂತರ
ಇಸ್ರೇಲಿನ ರಾಜನು ಅರಾಮ್ಯರ ಸೇನೆಗೆ ತಮ್ಮ ಒಡೆಯನ

---

**ಕೆಲವು ಜನರನ್ನು** ಅಕ್ಷರಶಃ ,‘‘ಒಬ್ಬರನ್ನಲ್ಲ ಅಥವಾ ಇಬ್ಬರನ್ನಲ್ಲ’’
ಇದು ‘‘ಮತ್ತೆ ಮತ್ತೆ’’ಎಂಬರ್ಥವನ್ನು ಕೊಡಬಲ್ಲದು.

ಬಳಿಗೆ ಹೋಗಲು ಆಜ್ಞಾಪಿಸಿದನು. ಅಂದಿನಿಂದ
ಇಸ್ರೇಲ್ ದೇಶದ ಮೇಲೆ ಧಾಳಿಮಾಡಲು ಯಾವ
ಸೈನಿಕರನ್ನೂ ಅರಾಮ್ಯರು ಕಳುಹಿಸಲಿಲ್ಲ.

### ಸಮಾರ್ಯದಲ್ಲಿ ಭೀಕರ ಬರಗಾಲ

24ಇದಾದನಂತರ, ಅರಾಮ್ಯರ ರಾಜನಾದ ಬೆನ್ಹದ
ದನು ತನ್ನ ಸೇನೆಯನ್ನೆಲ್ಲ ಒಟ್ಟಾಗಿ ಸೇರಿಸಿಕೊಂಡು,
ಸಮಾರ್ಯವನ್ನು ಸುತ್ತುವರಿದು ಆಕ್ರಮಣ ಮಾಡಲು
ಹೋದನು. 25ಜನರು ನಗರದೊಳಕ್ಕೆ ಆಹಾರವನ್ನು
ತರಲು ಸೈನಿಕರು ಅವಕಾಶ ಕೊಡಲಿಲ್ಲ. ಆದ್ದರಿಂದ
ಸಮಾರ್ಯದಲ್ಲಿ ಭೀಕರ ಬರಗಾಲವು ಆ ಕಾಲ
ದಲ್ಲಾಯಿತು. ಸಮಾರ್ಯದಲ್ಲಿ ಒಂದು ಹೇಸರಕತ್ತೆಯ
ತಲೆಯು ಎಂಭತ್ತು ಬೆಳ್ಳಿಯ ನಾಣ್ಯಗಳಿಗೆ ಮಾರಾಟ
ವಾಗುವಷ್ಟು ಕೆಟ್ಟ ಪರಿಸ್ಥಿತಿಯಿತ್ತು. ಅರ್ಧಸೇರು ಪಾರಿ
ವಾಳದ ಮಲದ ಲದ್ದಿಯು ಐದು ಬೆಳ್ಳಿನಾಣ್ಯಗಳಿಗೆ
ಮಾರಾಟವಾಗುತ್ತಿತ್ತು.

26ಇಸ್ರೇಲಿನ ರಾಜನು ನಗರದ ಸುತ್ತಲಿನ ಗೋಡೆಯ
ಮೇಲೆ ನಡೆಯುತ್ತಿರಲು ಸ್ತ್ರೀಯೊಬ್ಬಳು ಅವನನ್ನು, ''ನನ್ನ
ಪ್ರಭುವೇ, ರಾಜನೇ, ದಯವಿಟ್ಟು ನನಗೆ ಸಹಾಯ
ಮಾಡು''ಎಂದು ಕೂಗಿಕೊಂಡಳು.

27ಇಸ್ರೇಲಿನ ರಾಜನು, ''ಯೆಹೋವನು ನಿನಗೆ
ಸಹಾಯ ಮಾಡದಿದ್ದರೆ, ನಾನು ನಿನಗೆ ಹೇಗೆ ಸಹಾಯ
ಮಾಡಲಿ? ನಿನಗೆ ಕೊಡಲು ನನ್ನ ಬಳಿ ಏನೂ ಇಲ್ಲ;
ಕಣದಲ್ಲಿ ಕಾಳುಗಳಿಲ್ಲ, ದ್ರಾಕ್ಷಿಯ ಆಲೆಯಲ್ಲಿ ದ್ರಾಕ್ಷಾ
ರಸವಿಲ್ಲ''ಎಂದನು. 28ನಂತರ ಇಸ್ರೇಲಿನ ರಾಜನು ಆ
ಸ್ತ್ರೀಗೆ, ''ನಿನ್ನ ತೊಂದರೆಯೇನು?''ಎಂದು ಕೇಳಿದನು.

ಆ ಸ್ತ್ರೀಯು, ''ಇವಳು ನನಗೆ, 'ನಿನ್ನ ಮಗನನ್ನು ನನಗೆ
ಕೊಡು. ನಾವು ಅವನನ್ನು ಕೊಂದು, ಈ ಹೊತ್ತು
ತಿನ್ನೋಣ. ನಾಳೆ ನನ್ನ ಮಗನನ್ನು ತಿನ್ನೋಣ' ಎಂದಳು.
29ನಾವು ನನ್ನ ಮಗನನ್ನು ಬೇಯಿಸಿ, ನಾವು ತಿಂದು
ಬಿಟ್ಟೆವು. ಮಾರನೆಯ ದಿನ ನಾನು ಈ ಸ್ತ್ರೀಗೆ, 'ನಿನ್ನ
ಮಗನನ್ನು ನಾವು ಕೊಂದು ತಿನ್ನೋಣ' ಎಂದು ಹೇಳಿ
ದೆನು. ಆದರೆ ಅವಳು ತನ್ನ ಮಗನನ್ನು ಅಡಗಿಸಿಟ್ಟಿದ್ದಾಳೆ!''
ಎಂದು ಹೇಳಿದಳು. 30ಆ ಸ್ತ್ರೀಯ ಮಾತುಗಳನ್ನು ರಾಜನು
ಕೇಳಿದಾಗ, ದುಃಖದಿಂದ ತನ್ನ ಬಟ್ಟೆಗಳನ್ನೆಲ್ಲಾ ಹರಿದು
ಕೊಂಡನು. ಅವನ ಮೈಮೇಲೆ ಗೋಣಿತಟ್ಟಿರುವುದು
ಜನರಿಗೆಲ್ಲಾ ಕಾಣಿಸಿತು.

31ಇದಲ್ಲದೆ ರಾಜನು, ''ಈ ದಿನದ ಅಂತ್ಯದೊಳಗೆ
ನಾನು ಶಾಫಾಟನ ಮಗನಾದ ಎಲೀಷನ ತಲೆಯನ್ನು
ಅವನ ದೇಹದ ಮೇಲೆ ಉಳಿಯುವಂತೆ ಮಾಡಿದರೆ
ದೇವರು ನನ್ನನ್ನು ದಂಡಿಸಲಿ!'' ಎಂದು ಹೇಳಿದನು.

32ರಾಜನು ಎಲೀಷನ ಬಳಿಗೆ ಒಬ್ಬ ಸಂದೇಶಕನನ್ನು
ಕಳುಹಿಸಿದನು. ಎಲೀಷನು ತನ್ನ ಮನೆಯಲ್ಲಿ ಕುಳಿತಿದ್ದನು;
ಹಿರಿಯರು ಅವನೊಂದಿಗೆ ಕುಳಿತಿದ್ದರು. ಸಂದೇಶಕನು
ಬರುವುದಕ್ಕೆ ಮುಂಚೆಯೇ ಎಲೀಷನು ಹಿರಿಯರಿಗೆ,
''ನೋಡಿ, ನನ್ನ ತಲೆಯನ್ನು ಕತ್ತರಿಸಿಹಾಕಲು ಕೊಲೆ
ಗಾರನ (ಇಸ್ರೇಲಿನ ರಾಜ) ಮಗ ಜನರನ್ನು ಕಳುಹಿ
ಸಿದ್ದಾನೆ! ಆ ಸಂದೇಶಕನು ಬಂದಾಗ ಬಾಗಿಲನ್ನು ಮುಚ್ಚಿ
ಬಿಡಿ! ಅವನು ಒಳಗೆ ಪ್ರವೇಶಿಸದಂತೆ ಬಾಗಿಲನ್ನು ಹಿಡಿದು
ಕೊಳ್ಳಿ! ಅವನ ಹಿಂದೆ ಬರುತ್ತಿರುವ ಅವನ ಒಡೆಯನ ಕಾಲ
ಸಪ್ಪಳವು ನನಗೆ ಕೇಳಿಸುತ್ತಿದೆ!'' ಎಂದು ಹೇಳಿದನು.

33ಎಲೀಷನು ಹಿರಿಯರೊಂದಿಗೆ ಇನ್ನೂ ಮಾತನಾಡು
ತ್ತಿರುವಾಗ ಸಂದೇಶಕನು ಅವನ ಬಳಿಗೆ ಬಂದನು. ಅವನ
ಸಂದೇಶವು ಹೀಗಿತ್ತು: '' ಈ ಆಪತ್ತು ಯೆಹೋವ
ನಿಂದಲೇ ಬಂದಿದೆ! ನಾನೇಕೆ ಆತನನ್ನು ನೀರಿಕ್ಷಿಸಿ
ಕೊಂಡಿರಬೇಕು?''

7 ಎಲೀಷನು ಅವನಿಗೆ, ''ಯೆಹೋವನ ಸಂದೇಶವನ್ನು
ಕೇಳು: 'ನಾಳೆ ಇದೇ ಸಮಯಕ್ಕೆ, ಅಧಿಕವಾದ
ಆಹಾರವು ಬಹಳ ಕಡಿಮೆ ಬೆಲೆಗೆ ಸಿಗುತ್ತದೆ. ಒಂದು
ರೂಪಾಯಿಗೆ ಒಂದು ಗೂಡೆ ಹಿಟ್ಟನ್ನೂ ಎರಡು ಗೂಡೆ
ಜವೆಗೋಧಿಯನ್ನೂ ಸಮಾರ್ಯ ನಗರದ ಊರ ಬಾಗಿಲಿ
ನಲ್ಲಿರುವ ಮಾರುಕಟ್ಟೆಯಲ್ಲಿ ಮಾರಲಾಗುವುದು''
ಎಂದನು.

2ಆಗ ರಾಜನಿಗೆ ಆಪ್ತನಾಗಿದ್ದ ಅಧಿಕಾರಿಯು
ದೇವಮನುಷ್ಯನಿಗೆ (ಎಲೀಷನಿಗೆ), ''ಯೆಹೋವನು ಪರ
ಲೋಕಕ್ಕೆ ಕಿಟಕಿಗಳನ್ನು ಮಾಡಿಸಿದರೂ ಇದು ಸಂಭವಿ
ಸುವುದಿಲ್ಲ!'' ಎಂದು ಉತ್ತರಿಸಿದನು.

ಎಲೀಷನು, ''ನೀನು ನಿನ್ನ ಸ್ವಂತ ಕಣ್ಣುಗಳಿಂದಲೇ
ಇದನ್ನು ನೋಡುವೆ. ಆದರೆ ಆ ಆಹಾರದಲ್ಲಿ ಯಾವು
ದನ್ನೂ ನೀನು ತಿನ್ನುವುದಿಲ್ಲ''ಎಂದನು.

### ಅರಾಮ್ಯರ ಪಾಳೆಯವು ಬರಿದಾಗಿರುವುದನ್ನು ಕುಷ್ಠರೋಗಿಗಳು ಕಂಡುಹಿಡಿದರು

3ನಗರದ ಬಾಗಿಲಿನ ಹತ್ತಿರ ನಾಲ್ಕು ಮಂದಿ ಕುಷ್ಠ
ರೋಗಿಗಳಿದ್ದರು. ಅವರು, ''ನಾವು ಸಾಯುವುದನ್ನೇ
ಕಾಯುತ್ತಾ ಕುಳಿತಿರುವುದೇಕೆ? 4ಸಮಾರ್ಯದಲ್ಲಿ
ಆಹಾರವು ಇಲ್ಲವೇ ಇಲ್ಲ. ನಾವು ನಗರದ ಒಳಗೆ
ಹೋದರೆ,ನಾವು ಅಲ್ಲೇ ಸಾಯುತ್ತೇವೆ. ನಾವು ಇಲ್ಲೇ
ಕುಳಿತ್ತಿದ್ದರೂ, ಸಾಯುವುದು ನಿಶ್ಚಿತ. ಆದ್ದರಿಂದ ನಾವು
ಅರಾಮ್ಯರ ಪಾಳೆಯಕ್ಕೆ ಹೋಗೋಣ. ಅವರು ನಮ್ಮನ್ನು
ಬದುಕಿಸಿದರೆ ನಾವು ಬದುಕೋಣ. ಅವರು ನಮ್ಮನ್ನು
ಕೊಂದರೆ ಸಾಯೋಣ'' ಎಂದು ಮಾತನಾಡಿಕೊಂಡರು.

5ಅಂದು ಸಂಜೆ ಆ ನಾಲ್ವರು ಕುಷ್ಠರೋಗಿಗಳು ಅರಾ
ಮ್ಯರ ಪಾಳೆಯಕ್ಕೆ ಹೋದರು. ಅವರು ಪಾಳೆಯದ ಹೊರ
ಅಂಚಿಗೆ ಬಂದರು. ಅಲ್ಲಿ ಜನರೇ ಇರಲಿಲ್ಲ! 6ಅರಾಮ್ಯರ
ಸೇನೆಯು ರಥಗಳ, ಕುದುರೆಗಳ ಮತ್ತು ಮಹಾಸೇನೆಯ

ರಣಘೋಷವನ್ನು ಕೇಳುವಂತೆ ಯೆಹೋವನು ಮಾಡಿ
ದ್ದನು. ಅರಾಮ್ಯ ಸೈನಿಕರು, ''ಇಸ್ರೇಲಿನ ರಾಜನು, ಹಿತ್ತೀ
ಯರಿಗೆ ಮತ್ತು ಈಜಿಪ್ಟಿನವರಿಗೆ ಹಣಕೊಟ್ಟು ನಮ್ಮ
ವಿರುದ್ಧ ಹೋರಾಟಕ್ಕೆ ಬರುವಂತೆ ಮಾಡಿದ್ದಾನೆ'' ಎಂದು
ಮಾತನಾಡಿಕೊಂಡು,
7ಸಂಜೆಗೆ ಮುಂಚೆಯೇ ಓಡಿಹೋಗಿದ್ದರು. ಅವರು
ಎಲ್ಲವನ್ನೂ ಅಲ್ಲಿಯೇ ಬಿಟ್ಟುಹೋಗಿದ್ದರು. ಅವರು
ತಮ್ಮ ಗುಡಾರಗಳನ್ನು, ಕುದುರೆಗಳನ್ನು, ಹೇಸರ ಕತ್ತೆ
ಗಳನ್ನು ಅಲ್ಲಿಯೇ ಬಿಟ್ಟು ತಮ್ಮ ಜೀವರಕ್ಷಣೆಗಾಗಿ ಓಡಿ
ಹೋಗಿದ್ದರು.

## ಅರಾಮ್ಯರ ಪಾಳೆಯದಲ್ಲಿ ಕುಷ್ಠರೋಗಿಗಳು

8ಈ ಕುಷ್ಠರೋಗಿಗಳು ಪಾಳೆಯವು ಆರಂಭ
ವಾಗಿದ್ದಲ್ಲಿಗೆ ಬಂದು, ಒಂದು ಗುಡಾರದೊಳಕ್ಕೆ
ಹೋದರು. ಅವರು ಅಲ್ಲಿ ತಿಂದರು ಮತ್ತು ಕುಡಿದರು.
ನಂತರ ಈ ನಾಲ್ವರು ಬೆಳ್ಳಿಬಂಗಾರಗಳನ್ನು ಮತ್ತು
ಬಟ್ಟೆಗಳನ್ನು ಪಾಳೆಯದಿಂದ ಹೊರಗೆ ತೆಗೆದುಕೊಂಡು
ಹೋದರು. ಅವರು ಬೆಳ್ಳಿಬಂಗಾರಗಳನ್ನು ಮತ್ತು
ಬಟ್ಟೆಗಳನ್ನು ಅಡಗಿಸಿಟ್ಟರು. ನಂತರ ಅವರು ಹಿಂದಿರುಗಿ
ಬಂದು, ಮತ್ತೊಂದು ಗುಡಾರವನ್ನು ಪ್ರವೇಶಿಸಿದರು. ಆ
ಗುಡಾರದಿಂದಲೂ ಅವರು ವಸ್ತುಗಳನ್ನು ಕೊಂಡೊ
ಯ್ದರು. ಅವರು ಹೊರಗೆ ಹೋಗಿ ಅವುಗಳನ್ನು ಅಡಗಿ
ಸಿಟ್ಟರು. 9ಆಗ ಆ ಕುಷ್ಠರೋಗಿಗಳು, ''ನಾವು ತಪ್ಪು
ಮಾಡುತ್ತಿದ್ದೇವೆ! ಈ ದಿನ ನಮಗೆ ಶುಭವಾರ್ತೆ ಸಿಕ್ಕಿದೆ.
ಆದರೆ ನಾವು ನಿಶ್ಯಬ್ದದಿಂದ ಇದ್ದೇವೆ. ಸೂರ್ಯನು
ಮೇಲಕ್ಕೇರಿ ಬರುವವರೆಗೆ ನಾವು ಸುಮ್ಮನಿದ್ದರೆ ನಮ್ಮನ್ನು
ದಂಡಿಸಲಾಗುವುದು. ಈಗ ನಾವು ರಾಜನ ಮನೆಗೆ
ಹೋಗಿ ಅಲ್ಲಿ ವಾಸಿಸುವ ಜನರಿಗೆ ಇದನ್ನು ತಿಳಿ
ಸೋಣ''ಎಂದು ಮಾತನಾಡಿಕೊಂಡರು.

## ಕುಷ್ಠರೋಗಿಗಳು ತಿಳಿಸಿದ ಶುಭವಾರ್ತೆ

10ಈ ಕುಷ್ಠರೋಗಿಗಳು ನಗರದ ಬಾಗಿಲಿಗೆ ಬಂದು
ದ್ವಾರಪಾಲಕರನ್ನು ಕರೆದು. ''ನಾವು ಅರಾಮ್ಯರ ಪಾಳೆ
ಯಕ್ಕೆ ಹೋಗಿದ್ದೆವು. ಆದರೆ ನಾವು ಜನರ ಧ್ವನಿಯನ್ನು
ಕೇಳಲೇ ಇಲ್ಲ. ಅಲ್ಲಿ ಜನರ ಸುಳಿವಿಲ್ಲ. ಕುದುರೆಗಳು
ಮತ್ತು ಹೇಸರಕತ್ತೆಗಳು ಕಟ್ಟಿಹಾಕಿದಂತೆಯೇ ಇವೆ.
ಗುಡಾರಗಳಿನ್ನೂ ಯಥಾಸ್ಥಿತಿಯಲ್ಲಿವೆ. ಆದರೆ ಸೈನಿಕ
ರೆಲ್ಲರೂ ಹೊರಟುಹೋಗಿದ್ದಾರೆ''ಎಂದು ಹೇಳಿದರು.
11ಆಗ ನಗರದ ದ್ವಾರಪಾಲಕರು ಕೂಗುತ್ತಾ ರಾಜನ
ಮನೆಯಲ್ಲಿದ್ದ ಜನರಿಗೆ ಈ ಸಂಗತಿಗಳನ್ನು ತಿಳಿಸಿದರು.
12ಆಗ ರಾತ್ರಿಯಾಗಿದ್ದರೂ ರಾಜನು ತನ್ನ ಹಾಸಿಗೆಯಿಂದ
ಮೇಲಕ್ಕೆದ್ದನು. ರಾಜನು ತನ್ನ ಅಧಿಕಾರಿಗಳಿಗೆ, ''ಅರಾ
ಮ್ಯರ ಸೈನಿಕರು ಮಾಡಬೇಕೆಂದಿರುವುದನ್ನು ನಾನು
ನಿಮಗೆ ಹೇಳುತ್ತೇನೆ. ನಾವು ಬಹಳ ಹಸಿದಿದ್ದೇವೆಂಬುದು
ಅವರಿಗೆ ತಿಳಿದಿದೆ. ಅವರು ಹೊಲಗಳಲ್ಲಿ ಅಡಗಿಕೊಳ್ಳಲು
ಪಾಳೆಯವನ್ನು ಬಿಟ್ಟುಹೋಗಿದ್ದಾರೆ. 'ಇಸ್ರೇಲರು ನಗರ
ದಿಂದ ಹೊರಗೆ ಬಂದಾಗ, ನಾವು ಅವರನ್ನು ಜೀವಂತ
ವಾಗಿ ಸೆರೆಹಿಡಿದು ಅವರ ನಗರವನ್ನು ಪ್ರವೇಶಿಸಬಹುದು'
ಎಂದು ಅರಾಮ್ಯರು ಆಲೋಚಿಸಿದ್ದಾರೆ ''ಎಂದು
ಹೇಳಿದನು.
13ರಾಜನ ಅಧಿಕಾರಿಗಳಲ್ಲಿ ಒಬ್ಬನು, ''ನಮ್ಮಲ್ಲಿ
ಕೆಲವರು ನಗರದಲ್ಲಿ ಉಳಿದಿರುವ ಐದು ಕುದುರೆಗಳನ್ನು
ತೆಗೆದುಕೊಳ್ಳೋಣ. ನಗರದಲ್ಲಿ ಉಳಿದಿರುವ ಇಸ್ರೇಲಿನ
ಜನರಂತೆ ಹೇಗಾದರೂ ಈ ಕುದುರೆಗಳೂ ಬಹುಬೇಗ
ಸತ್ತುಹೋಗುತ್ತವೆ. ಈ ಜನರನ್ನು ಕಳುಹಿಸಿ ಅಲ್ಲಿ ಏನು
ನಡೆದಿದೆಯೆಂಬುದನ್ನು ನಾವು ತಿಳಿದುಕೊಳ್ಳೋಣ''
ಎಂದು ಹೇಳಿದನು.
14ಕೂಡಲೇ ರಾಜನು ಎರಡು ರಥಗಳನ್ನು ತರಿಸಿ
ಅರಾಮ್ಯರ ಸೇನೆಯು ಎಲ್ಲಿದೆ ಎಂಬುದನ್ನು ನೋಡಿ
ಕೊಂಡು ಬರುವುದಕ್ಕಾಗಿ ಅವರನ್ನು ಕಳುಹಿಸಿದನು.
15ಅವರು ಅರಾಮ್ಯರ ಸೇನೆಗಾಗಿ ಹುಡುಕಿಕೊಂಡು
ಜೋರ್ಡನ್ ನದಿಯವರೆಗೂ ಹೋದರು. ರಸ್ತೆಯ
ದಾರಿಯಲ್ಲೆಲ್ಲಾ ಬಟ್ಟೆಗಳು ಮತ್ತು ಆಯುಧಗಳು ಬಿದ್ದಿ
ದ್ದವು. ಅರಾಮ್ಯರು ಆತುರಾತುರವಾಗಿ ಹೋಗುವಾಗ
ಅವುಗಳನ್ನೆಲ್ಲಾ ಬಿಸಾಡಿ ಹೋಗಿದ್ದರು. ಸಂದೇಶಕರು
ಸಮಾರ್ಯಕ್ಕೆ ಹಿಂದಿರುಗಿ ಬಂದು ರಾಜನಿಗೆ ವಿಷಯ
ವನ್ನು ಹೇಳಿದರು.
16ಆಗ ಜನರು ಅರಾಮ್ಯರ ಪಾಳೆಯಕ್ಕೆ ಓಡುತ್ತಾ
ಹೋಗಿ, ಅಲ್ಲಿನ ಬೆಲೆಬಾಳುವ ವಸ್ತುಗಳನ್ನು ತೆಗೆದು
ಕೊಂಡರು. ಪ್ರತಿಯೊಬ್ಬರಿಗೂ ಹೇರಳವಾಗಿ ದೊರೆ
ಯಿತು. ಯೆಹೋವನು ಹೇಳಿದಂತೆಯೇ ಇದಾಯಿತು.
ಒಬ್ಬನು ಉತ್ತಮವಾದ ಒಂದು ಗೂಡೆ ಹಿಟ್ಟನ್ನು ಮತ್ತು
ಎರಡು ಗೂಡೆ ಜವೆಗೋಧಿಯನ್ನು ಕೇವಲ ಒಂದು
ರೂಪಾಯಿಗೆ ಕೊಳ್ಳಬಹುದಾಗಿತ್ತು!
17ರಾಜನು ತನಗೆ ಆಪ್ತನಾಗಿದ್ದ ಅಧಿಕಾರಿಯನ್ನು
ಪಟ್ಟಣದ ಬಾಗಿಲನ್ನು ಕಾಯಲು ಆರಿಸಿಕೊಂಡನು.
ಆದರೆ ಜನರು ಶತ್ರುಗಳ ಪಾಳೆಯದಲ್ಲಿದ್ದ ಆಹಾರವನ್ನು
ಪಡೆಯಲು ಓಡಿಹೋಗುವಾಗ ಅವನು ಜನರ ತುಳಿತಕ್ಕೆ
ಸಿಕ್ಕಿಕೊಂಡು ಸತ್ತುಹೋದನು. ರಾಜನು ಎಲೀಷನ
ಮನೆಗೆ ಬಂದಿದ್ದಾಗ, ದೇವಮನುಷ್ಯನು (ಎಲೀಷನು)
ಹೇಳಿದಂತೆಯೆ ಈ ಸಂಗತಿಗಳೆಲ್ಲಾ ಸಂಭವಿಸಿದವು.
18ಎಲೀಷನು, ''ಒಂದು ರೂಪಾಯಿಗೆ ಒಂದು ಗೂಡೆ
ಹಿಟ್ಟನ್ನೂ ಎರಡು ಗೂಡೆ ಜವೆಗೋಧಿಯನ್ನೂ
ಸಮಾರ್ಯ ನಗರದ ಊರುಬಾಗಿಲಿನಲ್ಲಿರುವ ಮಾರು
ಕಟ್ಟೆಯ ಸ್ಥಳದಲ್ಲಿ ಮಾರಲ್ಪಡುವುದು'' ಎಂದು ಮೊದಲೇ
ಹೇಳಿದ್ದನು. 19ಆದರೆ ಆ ಅಧಿಕಾರಿಯು ದೇವ

ಮನುಷ್ಯನಿಗೆ, ''ಯೆಹೋವನು ಪರಲೋಕಕ್ಕೆ ಕಿಟಕಿ
ಗಳನ್ನು ಮಾಡಿಸಿದರೂ ಇದು ಸಂಭವಿಸುವುದಿಲ್ಲ!''
ಎಂದು ಉತ್ತರಿಸಿದನು. ಎಲೀಷನು ಆ ಅಧಿಕಾರಿಗೆ,
''ನೀನು ನಿನ್ನ ಸ್ವಂತ ಕಣ್ಣುಗಳಿಂದಲೇ ಇದನ್ನು
ನೋಡುವೆ. ಆದರೆ ಆ ಆಹಾರದಲ್ಲಿ ಯಾವುದನ್ನೂ
ನೀನು ತಿನ್ನುವುದಿಲ್ಲ'' ಎಂದು ಹೇಳಿದ್ದನು. [20]ಆ
ಅಧಿಕಾರಿಗೆ ಅಂದು ಹೇಳಿದಂತೆಯೇ ಆಯಿತು. ಅವನು
ಊರ ಬಾಗಿಲಿನಲ್ಲಿ ಜನರ ತುಳಿತಕ್ಕೆ ಸಿಕ್ಕಿಕೊಂಡು ಸತ್ತು
ಹೋದನು.

### ಶೂನೇಮಿನ ಸ್ತ್ರೀಯ ವಿದೇಶ ಪ್ರಯಾಣ

8 ಎಲೀಷನು ತಾನು ಮರಳಿ ಜೀವಿಸುವಂತೆ ಮಾಡಿದ
ಬಾಲಕನ ತಾಯಿಯೊಂದಿಗೆ ಮಾತನಾಡಿದನು.
ಎಲೀಷನು, ''ನೀನು ಮತ್ತು ನಿನ್ನ ಕುಟುಂಬವು ಬೇರೆ
ದೇಶಕ್ಕೆ ಹೋಗಬೇಕು. ಏಕೆಂದರೆ ಈ ದೇಶದಲ್ಲಿ
ಬರಗಾಲವು ಏಳು ವರ್ಷಗಳವರೆಗೆ ಇರಬೇಕೆಂದು
ಯೆಹೋವನು ತೀರ್ಮಾನಿಸಿದ್ದಾನೆ.
[2]ದೇವಮನುಷ್ಯನು ಹೇಳಿದಂತೆಯೇ ಆ ಸ್ತ್ರೀಯು
ಫಿಲಿಷ್ಟಿಯರ ದೇಶದಲ್ಲಿ ಏಳು ವರ್ಷಗಳ ಕಾಲ ನೆಲೆಸಲು
ತನ್ನ ಕುಟುಂಬದೊಂದಿಗೆ ಹೋದಳು. [3]ಏಳು ವರ್ಷಗಳು
ಮುಗಿದ ನಂತರ ಆ ಸ್ತ್ರೀಯು ಫಿಲಿಷ್ಟಿಯರ ದೇಶದಿಂದ
ಹಿಂದಿರುಗಿ ಬಂದಳು.
ಆ ಸ್ತ್ರೀಯು ತನ್ನ ಮನೆಯನ್ನು ಮತ್ತು ಭೂಮಿಯನ್ನು
ತನಗೆ ಮತ್ತೆ ಕೊಡಿಸುವಂತೆ ಕೇಳಲು ರಾಜನ ಬಳಿಗೆ
ಹೋದಳು.
[4]ಆ ಸಮಯದಲ್ಲಿ ರಾಜನು ದೇವಮನುಷ್ಯನ
(ಎಲೀಷನ) ಸೇವಕನಾದ ಗೇಹಜಿಯ ಸಂಗಡ ಮಾತ
ನಾಡುತ್ತಿದ್ದನು. ರಾಜನು ಗೇಹಜಿಗೆ, ''ಎಲೀಷನು ಮಾಡಿ
ರುವ ಮಹತ್ಕಾರ್ಯಗಳೆಲ್ಲವುಗಳನ್ನು ನನಗೆ ದಯವಿಟ್ಟು
ತಿಳಿಸು'' ಎಂದು ಕೇಳಿದನು.
[5]ಎಲೀಷನು ಸತ್ತಬಾಲಕನಿಗೆ ಮತ್ತೆ ಜೀವವನ್ನು
ಬರುವಂತೆ ಮಾಡಿದ್ದರ ಬಗ್ಗೆ ಗೇಹಜಿಯು ರಾಜನಿಗೆ
ಹೇಳುತ್ತಿದ್ದನು. ಎಲೀಷನು ಮರಳಿ ಜೀವಬರಿಸಿದ ಬಾಲ
ಕನ ತಾಯಿಯು ಆ ಸಮಯದಲ್ಲಿ ರಾಜನ ಬಳಿಗೆ
ಹೋದಳು. ತನ್ನ ಮನೆಯನ್ನು ಮತ್ತು ಭೂಮಿಯನ್ನು
ತನಗೆ ಕೊಡಿಸಬೇಕೆಂದು ಕೇಳಿಕೊಳ್ಳಲು ಆಕೆ ಬಂದಿದ್ದಳು.
ಗೇಹಜಿಯು, ''ನನ್ನ ಒಡೆಯನೇ, ರಾಜನೇ, ಇವಳೇ ಆ
ಸ್ತ್ರೀಯು ! ಎಲೀಷನು ಮರಳಿ ಜೀವಬರಿಸಿದ ಬಾಲಕನು
ಇವನೇ!'' ಎಂದು ಹೇಳಿದನು.
[6]ರಾಜನು ಆ ಸ್ತ್ರೀಯನ್ನು ಕೇಳಿದಾಗ, ಅವಳು ತನಗೆ
ಸಂಭವಿಸಿದ್ದನ್ನು ಮತ್ತು ತನಗಿದ್ದ ಇಚ್ಛೆಯನ್ನು ತಿಳಿಸಿದಳು.
ಆಗ ರಾಜನು ಅವಳಿಗೆ ಸಹಾಯ ಮಾಡಲು ಒಬ್ಬ
ಅಧಿಕಾರಿಯನ್ನು ಕರೆದು, ''ಅವಳಿಗೆ ಸೇರಬೇಕಾದ ಆಸ್ತಿ
ಯೆಲ್ಲವನ್ನೂ ಆಕೆಗೆ ಕೊಡಿಸು. ಅವಳು ದೇಶವನ್ನು
ಬಿಟ್ಟಂದಿನಿಂದ ಈವರೆಗಿನ ಆಕೆಯ ಭೂಮಿಯ ಉತ್ಪಾ
ದನೆಯನ್ನೂ ಅವಳಿಗೆ ಕೊಡಿಸು''ಎಂದು ಹೇಳಿದನು.

### ಬೆನ್ಹದದನು ಹಜಾಯೇಲನನ್ನು ಎಲೀಷನ ಬಳಿಗೆ ಕಳುಹಿಸುವನು

[7]ಎಲೀಷನು ದಮಸ್ಕಕ್ಕೆ ಹೋದನು. ಅರಾಮ್ಯರ ರಾಜ
ನಾದ ಬೆನ್ಹದದನಿಗೆ ಕಾಯಿಲೆಯಾಗಿತ್ತು. ಬೆನ್ಹದದನಿಗೆ
ಒಬ್ಬನು, ''ದೇವಮನುಷ್ಯನು ಇಲ್ಲಿಗೆ ಬಂದಿದ್ದಾನೆ''
ಎಂದು ಹೇಳಿದನು.
[8]ಆಗ ರಾಜನಾದ ಬೆನ್ಹದದನು ಹಜಾಯೇಲನಿಗೆ,
''ದೇವಮನುಷ್ಯನನ್ನು ಕಾಣಲು ಒಂದು ಕಾಣಿಕೆಯನ್ನು
ತೆಗೆದುಕೊಂಡು ಹೋಗು. ನಾನು ನನ್ನ ಕಾಯಿಲೆಯಿಂದ
ಗುಣವಾಗುತ್ತೇನೆಯೇ ಇಲ್ಲವೇ ಎಂಬುದನ್ನು ತಿಳಿದು
ಕೊಳ್ಳಲು ಅವನು ಯೆಹೋವನಲ್ಲಿ ಪ್ರಾರ್ಥಿಸಲಿ''ಎಂದು
ಹೇಳಿದನು.
[9]ಹಜಾಯೇಲನು ತನ್ನೊಡನೆ ಕಾಣಿಕೆಯನ್ನು ತೆಗೆದು
ಕೊಂಡು ಎಲೀಷನನ್ನು ಭೇಟಿ ಮಾಡಲು ಹೋದನು.
ಅವನು ದಮಸ್ಕದಿಂದ ಎಲ್ಲಾ ವಿಧವಾದ ಉತ್ತಮ ವಸ್ತು
ಗಳನ್ನು ನಲವತ್ತು ಒಂಟೆಗಳ ಮೇಲೆ ಹೇರಿಸಿಕೊಂಡು
ಹೋದನು. ಹಜಾಯೇಲನು ಎಲೀಷನ ಬಳಿಗೆ ಹೋಗಿ,
''ನಿನ್ನ ಹಿಂಬಾಲಕನೂ ಅರಾಮ್ಯರ ರಾಜನೂ ಆದ
ಬೆನ್ಹದದನು ನನ್ನನ್ನು ನಿನ್ನ ಬಳಿಗೆ ಕಳುಹಿಸಿದನು. ತನ್ನ
ಕಾಯಿಲೆಯು ವಾಸಿಯಾಗುತ್ತದೆಯೇ ಇಲ್ಲವೇ ಎಂಬು
ದನ್ನು ಅವನು ನಿನ್ನಿಂದ ತಿಳಿದುಕೊಳ್ಳ ಬೇಕೆಂದಿದ್ದಾನೆ''
ಎಂದು ಹೇಳಿದನು.
[10]ಆಗ ಎಲೀಷನು ಹಜಾಯೇಲನಿಗೆ, ''ವಾಸಿಯಾಗು
ವುದು' ಎಂದು ಬೆನ್ಹದದನಿಗೆ ಹೇಳು. ಆದರೆ, 'ಅವನು
ಸಾಯುವುದು ಖಂಡಿತ' ಎಂದು ಯೆಹೋವನು ನನಗೆ
ತಿಳಿಸಿದ್ದಾನೆ'' ಎಂದು ಹೇಳಿದನು.

### ಹಜಾಯೇಲನ ಬಗ್ಗೆ ಎಲೀಷನ ಪ್ರವಾದನೆ

[11]ಹಜಾಯೇಲನು ನಾಚಿಕೊಳ್ಳುವ ತನಕ ಎಲೀಷನು
ಅವನನ್ನು ಒಂದೇ ಸಮನೆ ನೋಡಿದನು. ನಂತರ ದೇವ
ಮನುಷ್ಯನು ಅಳತೊಡಗಿದನು. [12]ಹಜಾಯೇಲನು,
''ಸ್ವಾಮೀ, ನೀವು ಅಳುವುದೇಕೇ''ಎಂದು ಕೇಳಿದನು.
ಎಲೀಷನು, ''ನಾನು ಅಳುತ್ತಿರುವುದೇಕೆಂದರೆ ನೀನು
ಇಸ್ರೇಲರಿಗೆ ಮಾಡುವ ಕೆಟ್ಟ ಕಾರ್ಯಗಳು ನನಗೆ
ತಿಳಿದಿವೆ. ನೀನು ಅವರ ನಗರಗಳ ಕೋಟೆಗಳನ್ನು ಸುಟ್ಟು
ಹಾಕುವೆ. ನೀನು ಅವರ ತರುಣರನ್ನು ಖಡ್ಗಗಳಿಂದ
ಇರಿದುಕೊಲ್ಲುವೆ . ನೀನು ಅವರ ಮಕ್ಕಳನ್ನು ಕೊಂದು
ಹಾಕುವೆ. ನೀನು ಅವರ ಗರ್ಭಿಣಿ ಸ್ತ್ರೀಯರನ್ನು ಸೀಳಿ
ಹಾಕುವೆ'' ಎಂದು ಹೇಳಿದನು.

13ಹಜಾಯೇಲನು, ''ನಾನು ಬಲಾಢ್ಯನಾದ ಮನುಷ್ಯ
ನಲ್ಲ! ನಾನು ಈ ಮಹತ್ಕಾರ್ಯಗಳನ್ನು ಮಾಡಲಾಗು
ವುದಿಲ್ಲ!'' ಎಂದು ಹೇಳಿದನು.

ಎಲೀಷನು, ''ನೀನು ಅರಾಮ್ಯರ ರಾಜನಾಗುವೆ
ಯೆಂದು ಯೆಹೋವನು ನನಗೆ ತಿಳಿಸಿದ್ದಾನೆ''ಎಂದು
ಹೇಳಿದನು. 14ಹಜಾಯೇಲನು ಎಲೀಷನ ಬಳಿಯಿಂದ
ಹೊರಟು ತನ್ನ ರಾಜನ ಬಳಿಗೆ ಹೋದನು. ಬೆನ್ಹದದನು
ಹಜಾಯೇಲನಿಗೆ, ''ಎಲೀಷನು ನಿನಗೆ ಏನು ಹೇಳಿದನು''
ಎಂದು ಕೇಳಿದನು.

ಹಜಾಯೇಲನು, ''ನಿನ್ನ ಕಾಯಿಲೆಯು ವಾಸಿಯಾಗು
ತ್ತದೆಯೆಂದು ಎಲೀಷನು ನನಗೆ ಹೇಳಿದನು'' ಎಂದನು.

## ಬೆನ್ಹದದನನ್ನು ಹಜಾಯೇಲನು ಕೊಂದುಹಾಕುವನು

15ಆದರೆ ಮಾರನೆಯ ದಿನ ಹಜಾಯೇಲನು ಒಂದು
ಹೊದಿಕೆಯನ್ನು ತೆಗೆದುಕೊಂಡು ನೀರಿನಲ್ಲಿ ನೆನೆಸಿದನು.
ನಂತರ ಅವನು ಆ ಹೊದಿಕೆಯನ್ನು ಬೆನ್ಹದದನ ಮುಖದ
ಮೇಲೆ ಹಾಕಿ, ಅವನ ಉಸಿರುಕಟ್ಟಿಸಿ ಸಾಯಿಸಿದನು. ಹಜಾ
ಯೇಲನು ನೂತನ ರಾಜನಾದನು.

## ಯೆಹೋರಾಮನು ತನ್ನ ಆಳ್ವಿಕೆಯನ್ನು ಆರಂಭಿಸುವನು

16ಯೆಹೋಷಾಫಾಟನ ಮಗನಾದ ಯೆಹೋ
ರಾಮನು ಯೆಹೂದದ ರಾಜನಾಗಿದ್ದನು. ಅಹಾಬನ
ಮಗನಾದ ಯೋರಾಮನು ಇಸ್ರೇಲಿನ ರಾಜನಾಗಿದ್ದ
ಐದನೆಯ ವರ್ಷದಲ್ಲಿ ಯೆಹೋರಾಮನು ಆಳಲಾರಂಭಿ
ಸಿದನು. 17ಯೆಹೋರಾಮನು ಆಳುವುದಕ್ಕೆ ಆರಂಭಿ
ಸಿದಾಗ ಅವನಿಗೆ ಮೂವತ್ತೆರಡು ವರ್ಷ ವಯಸ್ಸಾಗಿತ್ತು.
ಅವನು ಜೆರುಸಲೇಮಿನಲ್ಲಿ ಎಂಟು ವರ್ಷ ಆಳಿದನು.
18ಆದರೆ ಯೆಹೋರಾಮನು ಇಸ್ರೇಲಿನ ರಾಜರುಗಳಂತೆ
ಜೀವಿಸಿದನು ಮತ್ತು ಯೆಹೋವನು ಕೆಟ್ಟಕಾರ್ಯ
ಗಳೆಂದು ಹೇಳಿದ್ದನ್ನೇ ಮಾಡಿದನು. ಯೆಹೋರಾಮನು
ಅಹಾಬನ ಕುಟುಂಬದ ಜನರಂತೆ ಜೀವಿಸಿದನು. ಅವನ
ಪತ್ನಿಯು ಅಹಾಬನ ಮಗಳಾದ್ದರಿಂದ ಯೆಹೋ
ರಾಮನು ಹೀಗೆ ಜೀವಿಸಿದನು. 19ಆದರೆ ಯೆಹೋವನು
ತನ್ನ ಸೇವಕನಾದ ದಾವೀದನಿಗೆ ವಾಗ್ದಾನ ಮಾಡಿದ್ದುದ
ರಿಂದ ಯೆಹೂದವನ್ನು ನಾಶಗೊಳಿಸಲಿಲ್ಲ. ಯಾವಾ
ಗಲೂ ದಾವೀದನ ಕುಟುಂಬದ ಒಬ್ಬನು ರಾಜನಾಗಿ
ರುತ್ತಾನೆಂದು ಯೆಹೋವನು ವಾಗ್ದಾನ ಮಾಡಿದ್ದನು.

20ಯೆಹೋರಾಮನ ಕಾಲದಲ್ಲಿ ಎದೋಮ್ಯರು
ಯೆಹೂದದ ಆಳ್ವಿಕೆಗೆ ವಿರುದ್ಧವಾಗಿ ದಂಗೆ ಎದ್ದರು.
ಎದೋಮ್ಯರು ತಮ್ಮಲ್ಲೇ ಒಬ್ಬ ರಾಜನನ್ನು ಆರಿಸಿ
ಕೊಂಡಿದ್ದರು.

21ಆಗ ಯೆಹೋರಾಮನು ಮತ್ತು ಅವನ ರಥಗಳೆಲ್ಲ
ಚಾಯೀರಿಗೆ ಹೋದವು. ಎದೋಮಿನ ಸೇನೆಯು
ಅವರನ್ನು ಸುತ್ತುವರಿಯಿತು. ಯೆಹೋರಾಮನು ತನ್ನ
ಅಧಿಕಾರಿಗಳೊಂದಿಗೆ ಅವರನ್ನು ರಾತ್ರಿಯಲ್ಲಿ ಮುತ್ತಿಗೆ
ಹಾಕಿ ತಪ್ಪಿಸಿಕೊಂಡರು. ಆದರೆ ಆವನ ಸೈನಿಕರು ತಮ್ಮ
(ಗುಡಾರಗಳಿಗೆ) ಮನೆಗಳಿಗೆ ಓಡಿಹೋದರು. 22ಹೀಗೆ
ಎದೋಮ್ಯರು ಯೆಹೂದದ ಆಳ್ವಿಕೆಯಿಂದ ಬೇರ್ಪ
ಟ್ಟರು. ಅವರು ಇಂದಿತನಕ ಯೆಹೂದದ ಆಳ್ವಿಕೆಯಿಂದ
ಬೇರ್ಪಟ್ಟು ಸ್ವತಂತ್ರರಾಗಿದ್ದಾರೆ.

ಅದೇ ಸಮಯದಲ್ಲಿ ಲಿಬ್ನದವರು ಯೆಹೂದದ ಆಳ್ವಿಕೆ
ಯಿಂದ ಬೇರೆಯಾದರು.

23ಯೆಹೂದದ ರಾಜರುಗಳು ಎಂಬ ಇತಿಹಾಸ
ಪುಸ್ತಕದಲ್ಲಿ ಯೆಹೋರಾಮನು ಮಾಡಿದ ಇತರ ಎಲ್ಲಾ
ಕಾರ್ಯಗಳನ್ನು ಬರೆಯಲಾಗಿದೆ.

24ಯೆಹೋರಾಮನು ಸತ್ತುಹೋದನು. ಅವನನ್ನು
ದಾವೀದನಗರದಲ್ಲಿ ಅವನ ಪೂರ್ವಿಕರ ಬಳಿ ಸಮಾಧಿ
ಮಾಡಿದರು. ಯೆಹೋರಾಮನ ಮಗನಾದ ಅಹಜ್ಯನು
ನೂತನ ರಾಜನಾದನು.

## ಅಹಜ್ಯನು ತನ್ನ ಆಳ್ವಿಕೆಯನ್ನು ಆರಂಭಿಸಿದನು

25ಅಹಾಬನ ಮಗನಾದ ಯೋರಾಮನು ಇಸ್ರೇಲಿನ
ರಾಜನಾಗಿದ್ದ ಹನ್ನೆರಡನೆಯ ವರ್ಷದಲ್ಲಿ ಯೆಹೋ
ರಾಮನ ಮಗನಾದ ಅಹಜ್ಯನು ಯೆಹೂದದ ರಾಜ
ನಾದನು. 26ಅಹಜ್ಯನು ಆಳಲಾರಂಭಿಸಿದಾಗ ಅವನಿಗೆ
ಇಪ್ಪತ್ತೆರಡು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಒಂದು ವರ್ಷ ಆಳಿದನು. ಅವನ ತಾಯಿಯ
ಹೆಸರು ಅತಲ್ಯ. ಅವಳು ಇಸ್ರೇಲಿನ ರಾಜನಾದ ಒಮ್ರಿಯ
ಮಗಳು. 27ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯ
ಗಳನ್ನು ಅಹಜ್ಯನು ಮಾಡಿದನು. ಅಹಜ್ಯನು ಅಹಾಬನ
ಕುಟುಂಬದ ಜನರಂತೆ ಜೀವಿಸಿದ್ದನು. ಅಹಜ್ಯನು
ಅಹಾಬನ ಅಳಿಯನಾದ್ದರಿಂದ ಅವನು ಹೀಗೆ
ಜೀವಿಸಿದನು.

## ಹಜಾಯೇಲನ ವಿರುದ್ಧದ ಯುದ್ಧದಲ್ಲಿ ಯೋರಾಮನು ಗಾಯಗೊಂಡನು

28ಅಹಜ್ಯನು ಅಹಾಬನ ಮಗನಾದ ಯೋರಾಮನ
ಜೊತೆಯಲ್ಲಿ ಅರಾಮ್ಯರ ರಾಜನಾದ ಹಜಾಯೇಲನ
ವಿರುದ್ಧ ಯುದ್ಧ ಮಾಡಲು ರಾಮೋತ್‌ಗಿಲ್ಯಾದಿಗೆ
ಹೋದನು. ಅರಾಮ್ಯರು ಯೋರಾಮನನ್ನು ಗಾಯ
ಗೊಳಿಸಿದರು. 29ರಾಜ ಯೋರಾಮನು ಹಜಾಯೇಲನ
ವಿರುದ್ಧವಾಗಿ ಹೋರಾಡಿದಾಗ ರಾಮಾದಲ್ಲಿ ಅರಾಮ್ಯ
ದಿಂದ ತನಗಾದ ಗಾಯಗಳನ್ನು ಗುಣಪಡಿಸಿಕೊಳ್ಳಲು
ಇಸ್ರೇಲಿನ ರಾಜನು ಇಜ್ರೇಲ್ ಎಂಬ ಪಟ್ಟಣಕ್ಕೆ ಹಿಂತಿ
ರುಗಿದನು. ಯೆಹೂದದ ರಾಜನೂ ಯೆಹೋರಾಮನ
ಮಗನೂ ಆದ ಅಹಜ್ಯನು,ಅಹಾಬನ ಮಗನಾದ

ಯೋರಾಮನನ್ನು ನೋಡಲು ಇಜ್ರೇಲಿಗೆ ಹೋದನು.
ಯಾಕೆಂದರೆ ಅವನಿಗೆ ಕಾಯಿಲೆಯಾಗಿತ್ತು.

### ಯೇಹುವನ್ನು ಅಭಿಷೇಕಿಸುವಂತೆ ಒಬ್ಬ ಯುವಪ್ರವಾದಿಗೆ ಎಲೀಷನು ತಿಳಿಸಿದನು

9 ಪ್ರವಾದಿಯಾದ ಎಲೀಷನು ಪ್ರವಾದಿಗಳ ಗುಂಪಿ
ನಿಂದ ಒಬ್ಬನನ್ನು ಕರೆದು ಅವನಿಗೆ, ''ಎಣ್ಣೆಯಿರುವ
ಈ ಸಣ್ಣ ಸೀಸೆಯನ್ನು ನಿನ್ನ ಕೈಗಳಲ್ಲಿ ತೆಗೆದುಕೊಂಡು
ರಾಮೋತ್‌ಗಿಲ್ಯಾದಿಗೆ ಹೋಗು. 2ನೀನು ಅಲ್ಲಿಗೆ
ಹೋದಾಗ ಯೆಹೋಷಾಫಾಟನ ಮಗನಾದ ಯೇಹು
ವನ್ನು ಕಂಡುಹಿಡಿ. ಯೆಹೋಷಾಫಾಟನು ನಿಂಷಿಯ
ಮಗ. ಅಲ್ಲಿಗೆ ಹೋಗಿ ಅವನನ್ನು ಅವನ ಸೋದರರ
ಮಧ್ಯದಿಂದ ಮೇಲಕ್ಕೆಬ್ಬಿಸಿ ಒಂದು ಒಳಕೋಣೆಗೆ ಕರೆದು
ಕೊಂಡು ಹೋಗು. 3ಯೇಹುವಿನ ತಲೆಯ ಮೇಲೆ ಈ
ಸಣ್ಣ ಸೀಸೆಯಲ್ಲಿರುವ ಎಣ್ಣೆಯನ್ನು ಸುರಿದುಬಿಡು.
ನಂತರ ಅವನಿಗೆ, 'ಯೆಹೋವನು ಇಂತೆನ್ನುತ್ತಾನೆ: ನಾನು
ನಿನ್ನನ್ನು ಇಸ್ರೇಲಿನ ನೂತನ ರಾಜನನ್ನಾಗಿ ಅಭಿಷೇಕಿ
ಸಿದ್ದೇನೆ!' ಎಂದು ಹೇಳು. ಆ ಬಳಿಕ ಬಾಗಿಲನ್ನು ತೆಗೆದು
ಓಡಿಬಿಡು. ಅಲ್ಲಿ ಇರಬೇಡ!'' ಎಂದು ಹೇಳಿದನು.

4ತರುಣ ಪ್ರವಾದಿಯು ರಾಮೋತ್‌ಗಿಲ್ಯಾದಿಗೆ
ಹೋದನು. 5ಆ ತರುಣನು ಅಲ್ಲಿಗೆ ಬಂದಾಗ ಸೇನಾಧಿಪತಿ
ಗಳು ಕುಳಿತಿರುವುದನ್ನು ನೋಡಿ, ''ಸೇನಾಧಿಪತಿಯೇ,
ನಿನಗೆ ಒಂದು ಸಂದೇಶವಿದೆ''ಎಂದು ಹೇಳಿದನು.

ಯೇಹುವು, ''ನಾವೆಲ್ಲರೂ ಇಲ್ಲಿದ್ದೇವೆ. ನಮ್ಮಲ್ಲಿ
ಸಂದೇಶವಿರುವುದು ಯಾರಿಗೆ?'' ಎಂದು ಕೇಳಿದನು.

ಆ ತರುಣನು, ''ಸಂದೇಶವು ಸೇನಾಧಿಪತಿಯಾದ
ನಿನಗೆ''ಎಂದು ಹೇಳಿದನು.

6ಯೇಹು ಮೇಲೆದ್ದು ಮನೆಯೊಳಕ್ಕೆ ಹೋದನು. ಆಗ
ಆ ತರುಣ ಪ್ರವಾದಿಯು ಯೇಹುವಿನ ತಲೆಯ ಮೇಲೆ
ಎಣ್ಣೆಯನ್ನು ಸುರಿದು ಯೇಹುವಿಗೆ , ''ಇಸ್ರೇಲಿನ ದೇವ
ರಾದ ಯೆಹೋವನು ಇಂತೆನ್ನುವನು: 'ಯೆಹೋವನ
ಜನರಾದ ಇಸ್ರೇಲರಿಗೆ ನೂತನ ರಾಜನನ್ನಾಗಿ ನಾನು
ನಿನ್ನನ್ನು ಅಭಿಷೇಕಿಸುತ್ತಿದ್ದೇನೆ. 7ನೀನು ನಿನ್ನ ರಾಜನಾದ
ಅಹಾಬನ ಕುಟುಂಬವನ್ನು ನಾಶಗೊಳಿಸಲೇಬೇಕು. ನನ್ನ
ಸೇವಕರಾದ ಪ್ರವಾದಿಗಳ ಸಾವಿಗೆ ಮತ್ತು ಯೆಹೋವನ
ಸೇವಕರನ್ನು ಕೊಲ್ಲಿಸಿದುದಕ್ಕೆ ಈಜೆಬೆಲಳನ್ನು ನಾನು ಈ
ರೀತಿ ಶಿಕ್ಷಿಸುತ್ತೇನೆ. 8ಅಹಾಬನ ಕುಟುಂಬವೆಲ್ಲ ಸಾಯು
ತ್ತದೆ. ಅಹಾಬನ ಕುಟುಂಬದಲ್ಲಿ ಒಬ್ಬ ಗಂಡಸಾದರೂ
ಜೀವಿಸಿರಲು ನಾನು ಬಿಡುವುದಿಲ್ಲ. ಆ ಗಂಡಸು ಇಸ್ರೇಲಿ
ನಲ್ಲಿ ಸ್ವತಂತ್ರವಾಗಿರಲೀ ಇಲ್ಲವೆ ಗುಲಾಮನಾಗಿರಲೀ
ಅದು ನನಗೆ ಮುಖ್ಯವಲ್ಲ. 9 ನೆಬಾಟನ ಮಗನಾದ
ಯಾರೊಬ್ಬಮನ ಕುಟುಂಬದಂತೆ ಮತ್ತು ಅಹೀಯನ
ಮಗನಾದ ಬಾಷಾನ ಕುಟುಂಬದಂತೆ ಅಹಾಬನ
ಕುಟುಂಬವನ್ನೂ ನಾಶ ಮಾಡುತ್ತೇನೆ. 10ಇಜ್ರೇಲಿನ
ಪ್ರದೇಶದಲ್ಲಿ ಈಜೆಬೆಲಳನ್ನು ನಾಯಿಗಳು ಕಿತ್ತುತಿನ್ನು
ತ್ತವೆ. ಈಜೆಬೆಲಳನ್ನು ಸಮಾಧಿಮಾಡುವುದಿಲ್ಲ'' ಎಂದು
ಹೇಳಿದನು.

ಬಳಿಕ ಯುವಪ್ರವಾದಿಯು ಬಾಗಿಲನ್ನು ತೆರೆದು ಓಡಿ
ಹೋದನು.

### ಯೇಹುವು ರಾಜನೆಂದು ಸೇವಕರು ಘೋಷಿಸುವರು

11ಯೇಹುವು ತನ್ನ ರಾಜನ ಅಧಿಕಾರಿಗಳ ಬಳಿಗೆ
ಹಿಂದಿರುಗಿದನು. ಒಬ್ಬ ಅಧಿಕಾರಿಯು ಯೇಹುವಿಗೆ,
''ಶುಭವಾರ್ತೆಯೇ? ಆ ಹುಚ್ಚನು ನಿನ್ನ ಬಳಿಗೆ ಬಂದು
ದ್ದೇಕೆ?''ಎಂದು ಕೇಳಿದರು.

ಯೇಹುವು ಸೇವಕರಿಗೆ, ''ನೀವು ಆ ಮನುಷ್ಯನನ್ನು
ಬಲ್ಲವರಾಗಿದ್ದೀರಿ; ಅವನ ಹುಚ್ಚಾಟದ ಮಾತುಗಳೂ
ನಿಮಗೆ ತಿಳಿದಿವೆ'' ಎಂದು ಉತ್ತರಿಸಿದನು.

12ಆ ಅಧಿಕಾರಿಗಳು, ''ಇಲ್ಲ! ನಮಗೆ ನಿಜವನ್ನು ಹೇಳು.
ಅವನು ಹೇಳಿದುದೇನು?'' ಎಂದು ಕೇಳಿದರು. ಆ
ತರುಣ ಪ್ರವಾದಿಯು ತಿಳಿಸಿದ್ದ ಸಂಗತಿಗಳನ್ನು ಯೇಹುವು
ಆ ಆಧಿಕಾರಿಗಳಿಗೆ ಹೇಳಿದನು. ಯೇಹುವು ಅವರಿಗೆ,
''ಅವನು ಹೇಳಿದ್ದೇನಂದರೆ, ಯೆಹೋವನು ಇಂತೆನ್ನು
ವನು: ಇಸ್ರೇಲಿನ ನೂತನ ರಾಜನನ್ನಾಗಿ ನಿನ್ನನ್ನು ನಾನು
ಅಭಿಷೇಕಿಸಿದ್ದೇನೆ''ಎಂದು ಹೇಳಿದನು.

13ಆಗ ಪ್ರತಿಯೊಬ್ಬ ಅಧಿಕಾರಿಯೂ ತಮ್ಮತಮ್ಮ ನಿಲು
ವಂಗಿಗಳನ್ನು ತೆಗೆದು, ಅವುಗಳನ್ನು ಮೆಟ್ಟಿಲುಗಳ ಮೇಲೆ,
ಯೇಹುವಿನ ಮುಂದೆ ಇಟ್ಟರು. ಅನಂತರ ಅವರು
ತುತ್ತೂರಿಯನ್ನೂದಿ, ''ಯೇಹು ರಾಜನು!'' ಎಂದು
ಘೋಷಿಸಿದರು.

### ಯೇಹು ಇಜ್ರೇಲಿಗೆ ಹೋಗುವನು

14ಯೆಹೋಷಾಫಾಟನ ಮಗನೂ ನಿಂಷಿಯ ಮೊಮ್ಮ
ಗನೂ ಆದ ಯೇಹುವು ಯೋರಾಮನ ವಿರುದ್ಧ ಒಳ
ಸಂಚು ಮಾಡಿದನು.

ಆ ಸಮಯದಲ್ಲಿ ರಾಮೋತ್‌ಗಿಲ್ಯಾದನ್ನು ಅರಾಮ್ಯರ
ರಾಜನಾದ ಹಜಾಯೇಲನಿಂದ ರಕ್ಷಿಸಲು, ಯೋರಾ
ಮನೂ ಇಸ್ರೇಲರೂ ಪ್ರಯತ್ನಿಸಿದ್ದರು. 15ಆದರೆ ರಾಜ
ನಾದ ಯೋರಾಮನಿಗೆ ಅರಾಮ್ಯರು ಗಾಯ
ಗೊಳಿಸಿದ್ದರಿಂದ ಅವನು ವಾಸಿಮಾಡಿಕೊಳ್ಳಲು ಇಜ್ರೇ
ಲಿಗೆ ಹಿಂದಿರುಗಿ ಬಂದಿದ್ದನು. (ಅರಾಮ್ಯರ ರಾಜನಾದ
ಹಜಾಯೇಲನ ವಿರುದ್ಧ ಯೋರಾಮನು ಹೋರಾಟ
ಮಾಡಿದಾಗ ಅರಾಮ್ಯರು ಅವನನ್ನು ಗಾಯ
ಗೊಳಿಸಿದ್ದರು.) ಯೇಹು ಅಧಿಕಾರಿಗಳಿಗೆ, ''ನಾನು
ನೂತನ ರಾಜನೆಂದು ನೀವು ಒಪ್ಪಿಕೊಂಡರೆ, ಈ ಸುದ್ದಿ
ಯನ್ನು ಇಜ್ರೇಲಿನಲ್ಲಿ ಹೇಳಲು ಯಾರೂ ನಗರದಿಂದ

ತಪ್ಪಿಸಿಕೊಂಡು ಹೋಗಲು ಅವಕಾಶ ಕೊಡದಿರಿ''ಎಂದು ಹೇಳಿದನು.

16ಯೋರಾಮನು ಇಜ್ರೇಲಿನಲ್ಲಿ ವಿಶ್ರಾಂತಿ ಪಡೆಯು ತ್ತಿದ್ದನು. ಯೇಹು ರಥದಲ್ಲಿ ಇಜ್ರೇಲಿಗೆ ಹೋದನು. ಯೆಹೂದದ ಅರಸನಾದ ಅಹಜ್ಯನೂ ಯೋರಾಮನನ್ನು ನೋಡಲು ಇಜ್ರೇಲಿಗೆ ಬಂದಿದ್ದನು.

17ಇಜ್ರೇಲಿನ ಬುರುಜಿನಲ್ಲಿ ಒಬ್ಬ ಕಾವಲುಗಾರನು ನಿಂತಿದ್ದನು. ಅವನು ಯೇಹುವಿನ ದೊಡ್ಡ ಗುಂಪು ಬರುತ್ತಿರುವುದನ್ನು ನೋಡಿದನು. ಅವನು, ''ನಾನು ಜನರ ದೊಡ್ಡ ಗುಂಪನ್ನು ನೋಡುತ್ತಿರುವೆನು'' ಎಂದು ಹೇಳಿದನು.

ಯೋರಾಮನು, ''ಅವರನ್ನು ಸಂಧಿಸಲು ಯಾರನ್ನಾದರೂ ಕುದುರೆಯ ಮೇಲೆ ಕಳುಹಿಸಿ. 'ಶುಭವಾರ್ತೆಯುಂಟೋ?' ಎಂದು ಅವನು ಅವರನ್ನು ಕೇಳಲಿ'' ಎಂದು ಹೇಳಿದನು.

18ಯೇಹುವನ್ನು ಸಂಧಿಸಲು ಒಬ್ಬನು ಕುದುರೆಯ ಮೇಲೆ ಹೋಗಿ,''ರಾಜನಾದ ಯೋರಾಮನು 'ಶುಭವಾರ್ತೆಯುಂಟೋ?' ಎಂದು ಕೇಳುತ್ತಾನೆ'' ಅಂದನು.

ಯೇಹುವು, ''ನಮ್ಮ ಶುಭದಿಂದ ನೀನು ಮಾಡುವುದೇನಿದೆ ! ಬಾ, ನನ್ನನ್ನು ಹಿಂಬಾಲಿಸು'' ಎಂದು ಹೇಳಿದನು. ಕಾವಲುಗಾರನು ಯೋರಾಮನಿಗೆ, ''ಆ ಗುಂಪಿನ ಬಳಿಗೆ ಹೋದ ಸಂದೇಶಕನು, ಈವರೆವಿಗೂ ಹಿಂದಿರುಗಿ ಬರಲೇ ಇಲ್ಲ'' ಎಂದು ಹೇಳಿದನು.

19ಆಗ ಯೋರಾಮನು ಎರಡನೆಯವನನ್ನು ಕುದುರೆಯ ಮೇಲೆ ಕಳುಹಿಸಿದನು. ಅವನು ಯೇಹುವಿನ ಗುಂಪಿನ ಬಳಿಗೆ ಬಂದು, ''ರಾಜನಾದ ಯೋರಾಮನು, 'ಶುಭವಾರ್ತೆಯುಂಟೋ?' ಎಂದು ಕೇಳುತ್ತಿರುವನು'' ಎಂದು ಹೇಳಿದನು. ಯೇಹುವು, ''ನಮ್ಮ ಶುಭದಿಂದ ನೀನು ಮಾಡುವುದೇನಿದೆ! ಬಾ, ನನ್ನನ್ನು ಹಿಂಬಾಲಿಸು'' ಎಂದು ಹೇಳಿದನು.

20ಕಾವಲುಗಾರನು ಯೋರಾಮನಿಗೆ, ''ಆ ಗುಂಪಿನ ಬಳಿಗೆ ಹೋದ ಎರಡನೆಯವನೂ ಈವರೆವಿಗೂ ಹಿಂದುರುಗಿ ಬರಲೇ ಇಲ್ಲ. ರಥವನ್ನು ಓಡಿಸುತ್ತಿರುವವನು ಹುಚ್ಚನಂತೆ ರಥವನ್ನು ಓಡಿಸುತ್ತಿರುವುದನ್ನು ನೋಡಿದರೆ ಅವನು ನಿಂಷಿಯ ಮೊಮ್ಮಗನಾದ ಯೇಹುವಿರಬೇಕು!''
ಎಂದು ಹೇಳಿದನು. 21ಯೋರಾಮನು, ''ನನ್ನ ರಥವನ್ನು
ಸಿದ್ಧಗೊಳಿಸು!'' ಎಂದು ಹೇಳಿದನು.

ಯೋರಾಮನ ಸೇವಕನು ರಥವನ್ನು ಸಿದ್ಧಗೊಳಿಸಿದನು. ಇಸ್ರೇಲಿನ ರಾಜನಾದ ಯೋರಾಮನು ಮತ್ತು ಯೆಹೂದದ ರಾಜನಾದ ಅಹಜ್ಯನು ಯೇಹುವನ್ನು ಭೇಟಿ ಮಾಡಲು ತಮ್ಮ ರಥಗಳಲ್ಲಿ ಹೋದರು. ಅವರು ಇಜ್ರೇಲಿನವನಾದ ನಾಬೋತನ ಹೊಲದಲ್ಲಿ ಯೇಹುವನ್ನು ಸಂಧಿಸಿದರು.

22ಯೋರಾಮನು ಯೇಹುವನ್ನು, ''ಶುಭವಾರ್ತೆಯುಂಟೋ'' ಎಂದು ಕೇಳಿದನು.

ಯೇಹುವು, ''ನಿನ್ನ ತಾಯಿಯಾದ ಈಜೆಬೆಲಳು ಅನೇಕ ಅನೈತಿಕ ಮತ್ತು ಮಾಂತ್ರಿಕ ಕಾರ್ಯಗಳನ್ನು ಮಾಡುತ್ತಿರುವತನಕ ಶುಭವಿರುವುದಿಲ್ಲ'' ಎಂದು ಉತ್ತರಿಸಿದನು.

23ಯೋರಾಮನು ಓಡಿಹೋಗಲು ತನ್ನ ಕುದುರೆಗಳನ್ನು ತಿರುಗಿಸಿಕೊಂಡನು. ಯೋರಾಮನು ಅಹಜ್ಯನಿಗೆ, ''ಅಹಜ್ಯನೇ, ಇದು ಒಂದು ತಂತ್ರ!''ಎಂದು ಹೇಳಿದನು.

24ಆದರೆ ಯೇಹು ತನ್ನ ಬಿಲ್ಲನ್ನು ಸೆಳೆದು, ಶಕ್ತಿಯನ್ನೆಲ್ಲ ಒಗ್ಗೂಡಿಸಿ ಯೋರಾಮನ ಬೆನ್ನಿಗೆ ಬಾಣದಿಂದ ಹೊಡೆದನು. ಬಾಣವು ಯೋರಾಮನ ಹೃದಯವನ್ನು ಭೇದಿಸಿತು. ಯೋರಾಮನು ತನ್ನ ರಥದಲ್ಲಿಯೇ ಸತ್ತುಬಿದ್ದನು.
25ಯೇಹು ತನ್ನ ರಥದ ಸಾರಥಿಯಾದ ಬಿದ್ಕರನಿಗೆ,
''ಯೋರಾಮನ ದೇಹವನ್ನು ಎತ್ತಿ ಇಜ್ರೇಲಿಯನಾದ
ನಾಬೋತನ ಹೊಲದಲ್ಲಿ ಎಸೆದುಬಿಡು. ನಾನು ಮತ್ತು
ನೀನು ಯೋರಾಮನ ತಂದೆಯಾದ ಅಹಾಬನ ಸಂಗಡ
ಹೋಗುತ್ತಿರುವಾಗ 26ಯೆಹೋವನು, 'ನೀನು ನಿನ್ನೆ
ನಾಬೋತನ ಮತ್ತು ಅವನ ಮಕ್ಕಳ ರಕ್ತವನ್ನು ಯಾವ
ಹೊಲದಲ್ಲಿ ಸುರಿಸಿದೆಯೋ ಅದೇ ಹೊಲದಲ್ಲಿ ನಿನಗೆ
ಮುಯ್ಯಿ ತೀರಿಸುವೆನು' ಎಂದು ಪ್ರವಾದಿಯಿಂದ
ಹೇಳಿಸಿದ್ದು ನಿನಗೆ ನೆನಪಿರುವುದಲ್ಲವೇ? ಯೆಹೋವನ
ಮಾತು ನೆರವೇರುವಂತೆ ಯೋರಾಮನ ದೇಹವನ್ನು
ತೆಗೆದು ಅದೇ ಹೊಲದಲ್ಲಿ ಎಸೆದುಬಿಡು!'' ಎಂದು
ಹೇಳಿದನು.

27ಯೆಹೂದದ ರಾಜನಾದ ಅಹಜ್ಯನು ಇದನ್ನು ಕಂಡು ತೋಟದ ಮನೆಯ ಮೂಲಕ ಓಡಿಹೋದನು. ಯೇಹು ಅವನನ್ನು ಹಿಂಬಾಲಿಸಿಕೊಂಡು ಹೋಗಿ, ''ಅಹಜ್ಯನನ್ನೂ ಅವನ ರಥದಲ್ಲಿಯೇ ಹೊಡೆಯಿರಿ!'' ಎಂದು ಹೇಳಿದನು.

ಯೇಹುವಿನ ಜನರು ಅಹಜ್ಯನನ್ನು ಇಬ್ಲೆಯಾಮಿನ
ಬಳಿಯಿರುವ ಗೂರ್‌ನಲ್ಲಿ ಹೊಡೆದುಹಾಕಿದರು. ಅಹ
ಜ್ಯನು ಮೆಗಿದ್ದೋವಿಗೆ ಓಡಿಹೋದರೂ ಅಲ್ಲಿ ಸತ್ತು
ಹೋದನು. 28ಅಹಜ್ಯನ ಸೇವಕರು ಅವನ ದೇಹವನ್ನು
ಜೆರುಸಲೇಮಿಗೆ ತಂದರು. ಅವನನ್ನು ದಾವೀದ ನಗರ
ದಲ್ಲಿ ಅವನ ಪೂರ್ವಿಕರ ಬಳಿಯಲ್ಲಿ, ಸಮಾಧಿ
ಮಾಡಿದರು. 29ಯೋರಾಮನು ಇಸ್ರೇಲಿನ ರಾಜನಾಗಿದ್ದ
ಹನ್ನೊಂದನೆಯ ವರ್ಷದಲ್ಲಿ ಅಹಜ್ಯನು ಯೆಹೂದದ
ರಾಜನಾದನು.

### ಈಜೆಬೆಲಳ ಭೀಕರ ಸಾವು

30ಯೇಹುವು ಇಜ್ರೇಲಿಗೆ ಹೋದನು. ಈಜೆಬೆಲಳಿಗೆ ಈ ಸುದ್ದಿಯು ತಿಳಿಯಿತು. ಅವಳು ತಲೆಗೂದಲನ್ನು

ಸುಂದರವಾಗಿ ಕಟ್ಟಿಕೊಂಡು, ಅಲಂಕರಸಿಕೊಂಡಳು.
ನಂತರ ಅವಳು ಹೊರಗೆ ನೋಡುತ್ತಾ ಕಿಟಕಿಯ ಹತ್ತಿರ
ನಿಂತುಕೊಂಡಳು. 31 ಯೇಹು ನಗರದೊಳಕ್ಕೆ ಪ್ರವೇಶಿಸಿ
ದನು. ಈಜೆಬೆಲಳು, ‘‘ಜಿಮ್ರಿ* ಕ್ಷೇಮವೇ! ಅವ
ನಂತೆಯೇ ನೀನೂ ನಿನ್ನ ಒಡೆಯನನ್ನು ಕೊಂದು
ಹಾಕಿದೆ!’’ ಎಂದಳು.
32 ಯೇಹು ಕಿಟಕಿಯ ಕಡೆ ಮೇಲೆ ನೋಡಿದನು.
ಅವನು, ‘‘ನನ್ನ ಪಕ್ಷದಲ್ಲಿರುವವರು ಯಾರು? ಯಾರಿ
ದ್ದೀರಿ?’’ ಎಂದನು.
ಆ ಕಿಟಕಿಯಿಂದ ಇಬ್ಬರು ಮೂವರು ಕಂಚುಕಿಗಳು
ಯೇಹುವಿನತ್ತ ನೋಡಿದರು. 33 ಯೇಹುವು ‘‘ಈಜೆಬೆಲ
ಳನ್ನು ಹೊರಕ್ಕೆ ಎಸೆಯಿರಿ!’’ ಎಂದು ಅವರಿಗೆ ಹೇಳಿದನು.
ಆಗ ಕಂಚುಕಿಗಳು ಈಜೆಬೆಲಳನ್ನು ಕೆಳಕ್ಕೆ ಎಸೆದರು.
ಈಜೆಬೆಲಳ ರಕ್ತವು ಗೋಡೆಗಳ ಮೇಲೆ ಮತ್ತು
ಕುದುರೆಗಳ ಮೇಲೆ ಚಿಮ್ಮಿತು. ಕುದುರೆಗಳು ಈಜೆಬೆಲಳ
ದೇಹದ ಮೇಲೆ ತುಳಿದಾಡಿದವು. 34 ಯೇಹುವು ಮನೆ
ಯೊಳಕ್ಕೆ ಹೋಗಿ ಅನ್ನಪಾನಗಳನ್ನು ತೆಗೆದುಕೊಂಡನು.
ನಂತರ ಅವನು, ‘‘ಈಗ ಶಾಪಗ್ರಸ್ತಳಾದ ಆ ಸ್ತ್ರೀಯನ್ನು
ನೋಡಿ. ಅವಳು ರಾಜನ ಮಗಳಾದ್ದರಿಂದ ಸಮಾಧಿ
ಮಾಡಿ’’ಎಂದು ಹೇಳಿದನು.
35 ಈಜೆಬೆಲಳನ್ನು ಸಮಾಧಿಮಾಡಲು ಜನರು
ಹೋದರು. ಆದರೆ ಅವರಿಗೆ ಅವಳ ದೇಹವು ಸಿಗಲಿಲ್ಲ.
ಅವರಿಗೆ ಅವಳ ತಲೆಬುರುಡೆ, ಕೈಕಾಲುಗಳು ಮಾತ್ರ
ಸಿಕ್ಕಿದವು. 36 ಜನರು ಹಿಂದಿರುಗಿ ಬಂದು ಯೇಹುವಿಗೆ
ಅದನ್ನು ಹೇಳಿದರು. ಯೇಹುವು, ‘‘ಯೆಹೋವನು ತನ್ನ
ಸೇವಕನೂ ತಿಷ್ಬೀಯನೂ ಆದ ಎಲೀಯನಿಗೆ ಈ ರೀತಿ
ಸಂದೇಶ ನೀಡಲು ಹೇಳಿದ್ದನು. ಎಲೀಯನು ಹೇಳಿದ್ದೇ
ನಂದರೆ: ಇಜ್ರೇಲ್ ಪ್ರದೇಶದಲ್ಲಿ ಈಜೆಬೆಲಳ ದೇಹ
ವನ್ನು ನಾಯಿಗಳು ತಿನ್ನುತ್ತವೆ. 37 ಇಜ್ರೇಲ್ ಪ್ರದೇಶದ
ಹೊಲದಲ್ಲಿ ಈಜೆಬೆಲಳ ದೇಹವು ಸಗಣಿಯಂತಿರುತ್ತದೆ.
ಈಜೆಬೆಲಳ ದೇಹವನ್ನು ಜನರು ಗುರುತಿಸಲಾಗುವು
ದಿಲ್ಲ!’’ ಎಂದು ಹೇಳಿದ್ದನು.

## ಸಮಾರ್ಯದ ನಾಯಕರಿಗೆ ಯೇಹು ಬರೆಯುವನು

10 ಸಮಾರ್ಯದಲ್ಲಿ ಅಹಾಬನಿಗೆ ಎಪ್ಪತ್ತು ಮಂದಿ
ಮಕ್ಕಳಿದ್ದರು. ಯೇಹುವು ಇಜ್ರೇಲಿನ ನಾಯಕ
ರಿಗೆ ಮತ್ತು ಅಧಿಕಾರಿಗಳಿಗೆ ಪತ್ರಗಳನ್ನು ಬರೆದು
ಸಮಾರ್ಯಕ್ಕೆ ಕಳುಹಿಸಿದನು. ಅಹಾಬನ ಮಕ್ಕಳನ್ನು
ಬೆಳೆಸಿದ ಪಾಲಕರಿಗೂ ಅವನು ಪತ್ರಗಳನ್ನು ಕಳುಹಿಸಿ
ದನು. ಯೇಹುವು ಪತ್ರಗಳಲ್ಲಿ, 2-3 ‘‘ನಿಮ್ಮ ಕೈಗೆ ಈ ಪತ್ರವು
ತಲುಪಿದ ತಕ್ಷಣ, ನಿಮ್ಮ ಒಡೆಯನ ಕುಟುಂಬದಲ್ಲಿ ಬಹಳ
ಉತ್ತಮನಾದ ಮತ್ತು ಸಮರ್ಥನಾದ ಒಬ್ಬ ವ್ಯಕ್ತಿಯನ್ನು
ಆರಿಸಿರಿ. ನಿಮ್ಮ ಬಳಿ ರಥಗಳೂ ಕುದುರೆಗಳೂ ಇವೆ.
ನೀವು ಬಲಾಢ್ಯವಾದ ನಗರದಲ್ಲಿ ವಾಸಿಸುತ್ತಿರುವಿರಿ.
ನಿಮ್ಮ ಬಳಿ ಆಯುಧಗಳಿವೆ. ನೀವು ಆರಿಸಿದವನನ್ನು ಅವನ
ತಂದೆಯ ಸಿಂಹಾಸನದ ಮೇಲೆ ಕುಳ್ಳಿರಿಸಿರಿ. ನಂತರ ನಿಮ್ಮ
ತಂದೆಯ ಕುಟುಂಬಕ್ಕಾಗಿ ಹೋರಾಡಿ’’ ಎಂದು
ಬರೆದಿದ್ದನು.
4 ಆದರೆ ಇಜ್ರೇಲಿನ ಅಧಿಕಾರಿಗಳು ಮತ್ತು ನಾಯಕರು
ಬಹಳ ಭಯಗೊಂಡಿದ್ದರು. ಅವರು, ‘‘ಇಬ್ಬರು ರಾಜರು
(ಯೋರಾಮ್ ಮತ್ತು ಅಹಜ್ಯ) ಯೇಹುವನ್ನು ತಡೆಯ
ಲಾಗಲಿಲ್ಲ. ನಾವೂ ಅವನನ್ನು ತಡೆಯಲಾಗುವುದಿಲ್ಲ’’
ಎಂದು ಹೇಳಿದರು.
5 ಅಹಾಬನ ಮನೆಯನ್ನು ನೋಡಿಕೊಳ್ಳುವ ಗೃಹಾಧಿ
ಕಾರಿ, ನಗರವನ್ನು ನಿಯಂತ್ರಿಸುವ ನಗರಾಧಿಕಾರಿ, ಹಿರಿ
ಯರು ಮತ್ತು ಅಹಾಬನ ಮಕ್ಕಳ ಪಾಲಕರಾದ ಜನರೆ
ಲ್ಲರೂ ಯೇಹುವಿಗೆ ಈ ಸಂದೇಶವನ್ನು ಕಳುಹಿಸಿದರು:
‘‘ನಾವು ನಿನ್ನ ಸೇವಕರು. ನೀನು ನಮಗೆ ಹೇಳುವುದನ್ನೆಲ್ಲಾ
ನಾವು ಮಾಡುತ್ತೇನೆ. ನಾವು ಯಾರನ್ನೂ ರಾಜನನ್ನಾಗಿ
ಮಾಡುವುದಿಲ್ಲ. ನಿನಗೆ ಒಳ್ಳೆಯದೆಂದು ತೋಚಿದ್ದನ್ನು
ಮಾಡು.’’

## ಸಮಾರ್ಯದ ನಾಯಕರು ಅಹಾಬನ ಮಕ್ಕಳನ್ನು ಕೊಂದುಹಾಕುವರು

6 ನಂತರ ಯೇಹು ಈ ನಾಯಕರಿಗೆ ಎರಡನೆಯ
ಪತ್ರವನ್ನು ಬರೆದನು. ಯೇಹುವು, ‘‘ನೀವು ನನಗೆ
ಬೆಂಬಲ ಕೊಡುವುದಾದರೆ ಮತ್ತು ವಿಧೇಯರಾಗಿರುವು
ದಾದರೆ ಅಹಾಬನ ಮಕ್ಕಳ ತಲೆಗಳನ್ನು ಕತ್ತರಿಸಿ ಹಾಕಿ.
ನಾಳೆ ಇದೇ ಸಮಯಕ್ಕೆ ಇಜ್ರೇಲಿಗೆ ನನ್ನ ಬಳಿಗೆ ಅವು
ಗಳನ್ನು ತನ್ನಿ. ಅಹಾಬನಿಗೆ ಎಪ್ಪತ್ತು ಮಂದಿ ಮಕ್ಕಳಿದ್ದರು.
ಅವರು ತಮ್ಮ ಪಾಲಕರಾದ ನಗರದ ನಾಯಕರ ಬಳಿ
ಯಲ್ಲಿದ್ದರು. 7 ನಗರದ ನಾಯಕರಿಗೆ ಈ ಪತ್ರವು ಬಂದು
ತಲುಪಿದಾಗ, ಅವರು ರಾಜನ ಎಪ್ಪತ್ತು ಮಂದಿ ಮಕ್ಕಳನ್ನು
ಕರೆದುಕೊಂಡು ಹೋಗಿ ಕೊಂದುಹಾಕಿದರು. ನಂತರ ಆ
ನಾಯಕರು ರಾಜನ ಮಕ್ಕಳ ತಲೆಗಳನ್ನು ಬುಟ್ಟಿಗಳಲ್ಲಿ
ಹಾಕಿ ಇಜ್ರೇಲಿನಲ್ಲಿದ್ದ ಯೇಹುವಿನ ಬಳಿಗೆ ಕಳುಹಿ
ಸಿದರು. 8 ಸಂದೇಶಕನೊಬ್ಬನು ಯೇಹುವಿಗೆ ಬಳಿಗೆ
ಬಂದು ಅವನಿಗೆ, ‘‘ಅವರು ರಾಜನ ಮಕ್ಕಳ ತಲೆಗಳನ್ನು
ತಂದಿದ್ದಾರೆ!’’ ಎಂದು ಹೇಳಿದನು.
ಆಗ ಯೇಹು, ‘‘ನಗರದ ಬಾಗಿಲಿನ ಬಳಿ ನಾಳೆ
ಮುಂಜಾನೆಯ ತನಕ ಆ ತಲೆಗಳನ್ನು ಎರಡು ರಾಶಿಗಳ
ನ್ನಾಗಿ ಹಾಕಿ’’ ಎಂದು ಹೇಳಿದನು.

---

**ಜಿಮ್ರಿ** ಅನೇಕ ವರ್ಷಗಳ ಹಿಂದೆ ಏಲಾ ಮತ್ತು ಇಸ್ರೇಲಿನ ಬಾಷಾನ ಕುಟುಂಬದವರನ್ನು ಕೊಂದವನೇ ಜಿಮ್ರಿ.

[9]ಮುಂಜಾನೆ, ಯೇಹು ಹೊರಗೆ ಬಂದು ಜನರ
ಮುಂದೆ ನಿಂತು ಅವರಿಗೆ, ‘‘ನೀವು ನಿರಪರಾಧಿಗಳು.
ನಾನಾದರೊ ನನ್ನ ಒಡೆಯನ ಮೇಲೆ ಒಳಸಂಚು ಮಾಡಿ
ದವನು. ನಾನು ಅವನನ್ನು ಕೊಂದೆನು. ಆದರೆ ಅಹಾಬನ
ಮಕ್ಕಳನ್ನೆಲ್ಲ ಕೊಂದವರು ಯಾರು? ನೀವು ಅವರನ್ನು
ಕೊಂದಿದ್ದೀರಿ! [10]ಯೆಹೋವನು ಹೇಳಿದ್ದೆಲ್ಲವೂ ಸಂಭ
ವಿಸುತ್ತದೆ ಎಂಬುದನ್ನು ನೀವು ತಿಳಿದಿರಬೇಕು. ಅಹಾಬನ
ಕುಟುಂಬಕ್ಕೆ ಇವುಗಳನ್ನು ಸಂಭವಿಸುತ್ತವೆಯೆಂದು
ಯೆಹೋವನು ಎಲೀಯನ ಮೂಲಕ ತಿಳಿಸಿದ್ದನು.
ಅಂತೆಯೇ ಆತನು ಮಾಡಿದ್ದಾನೆ’’ ಅಂದನು. [11]ಇಜ್ರೇಲಿ
ನಲ್ಲಿ ವಾಸಿಸುತ್ತಿದ್ದ ಆಹಾಬನ ಕುಟಂಬದ ಉಳಿದವ
ರನ್ನೆಲ್ಲ ಯೇಹು ಕೊಂದುಹಾಕಿದನು. ಅಹಾಬನ ಅಪ್ತ
ಮಿತ್ರರು, ಯಾಜಕರು ಮತ್ತು ಪ್ರಮುಖರನ್ನೆಲ್ಲ
ಯೇಹುವು ಕೊಂದುಹಾಕಿದನು. ಅಹಾಬನ ಜನರಲ್ಲಿ
ಯಾರನ್ನೂ ಉಳಿಸಲಿಲ್ಲ.

### ಅಹಜ್ಯನ ಬಂಧುಗಳನ್ನು ಯೇಹು ಕೊಂದುಹಾಕವನು

[12]ಯೇಹು ಇಜ್ರೇಲನ್ನು ಬಿಟ್ಟು ಸಮಾರ್ಯಕ್ಕೆ
ಹೋದನು. ಯೇಹುವು ದಾರಿಯಲ್ಲಿ ಕುರುಬರ ಪಾಳ್ಯ
ವೆಂದು ಕರೆಯುವ ಸ್ಥಳದಲ್ಲಿ ತಂಗಿದನು. ಅವನು
ಬೆತ್ಎಕೇಡ್‌ನ ರಸ್ತೆಯಲ್ಲಿ, ಕುರುಬರು ಕುರಿಗಳಿಂದ
ತುಪ್ಪಟವನ್ನು ಕತ್ತರಿಸುವ ಒಂದು ಮನೆಗೆ ಹೋದನು.
[13]ಯೇಹು ಯೆಹೂದದ ರಾಜನಾದ ಅಹಜ್ಯನ ಬಂಧು
ಗಳನ್ನು ಭೇಟಿ ಮಾಡಿ ಅವರಿಗೆ, ‘‘ನೀವು ಯಾರು?’’
ಎಂದು ಕೇಳಿದನು.

ಅವರು, ‘‘ನಾವು ಯೆಹೂದದ ರಾಜನಾದ ಅಹಜ್ಯನ
ಬಂಧುಗಳು. ನಾವು ರಾಜನ ಮಕ್ಕಳನ್ನು ಮತ್ತು ರಾಜ
ಮಾತೆಯ ಮಕ್ಕಳನ್ನು ನೋಡಲು ಬಂದಿದ್ದೇವೆ’’
ಎಂದರು.

[14]ಆಗ ಯೇಹುವು ತನ್ನ ಜನರಿಗೆ, ‘‘ಅವರನ್ನು ಜೀವ
ಸಹಿತ ಹಿಡಿದುತನ್ನಿ!’’ ಎಂದು ಹೇಳಿದನು. ಯೇಹುವಿನ
ಜನರು ಅಹಜ್ಯನ ಬಂಧುಗಳನ್ನು ಜೀವಸಹಿತ ಹಿಡಿದು
ತಂದರು. ಅಲ್ಲಿ ನಲವತ್ತೆರಡು ಮಂದಿ ಜನರಿದ್ದರು.
ಯೇಹು ಬೆತ್ಎಕೇಡ್‌ನ ಬಾವಿಯ ಹತ್ತಿರ ಅವರನ್ನು
ಕೊಂದುಹಾಕಿದನು. ಯೇಹುವು ಯಾರನ್ನೂ ಜೀವಸಹಿತ
ಉಳಿಸಲಿಲ್ಲ.

### ಯೇಹು ಯೆಹೋನಾದಾಬನನ್ನು ಸಂಧಿಸಿದನು

[15]ಯೇಹುವು ಅಲ್ಲಿಂದ ಹೋದ ಮೇಲೆ, ರೇಕಾಬನ
ಮಗನಾದ ಯೆಹೋನಾದಾಬನನ್ನು ಸಂಧಿಸಿದನು.
ಯೆಹೋನಾದಾಬನು ಯೇಹುವನ್ನು ಸಂಧಿಸಲು ಬರುತ್ತಿ
ದ್ದನು. ಯೇಹು ಯೆಹೋನಾದಾಬನನ್ನು ಅಭಿನಂದಿಸಿ
ಅವನಿಗೆ, ‘‘ನಾನು ನಿನಗೆ ನಂಬಿಗಸ್ತನಾಗಿರುವಂತೆ ನೀನು
ನನಗೆ ನಂಬಿಗಸ್ತನಾದ ಸ್ನೇಹಿತನಾಗಿರುವಿಯಾ?’’ ಎಂದು
ಕೇಳಿದನು.

ಯೆಹೋನಾದಾಬನು, ‘‘ಹೌದು, ನಾನು ನಿನಗೆ
ನಂಬಿಗಸ್ಥನಾದ ಸ್ನೇಹಿತನು’’ ಎಂದು ಉತ್ತರಿಸಿದನು.

ಯೇಹು, ‘‘ನೀನು ನಂಬಿಗಸ್ಥನಾದರೆ, ನಿನ್ನ ಕೈಯನ್ನು
ಕೊಡು’’ ಎಂದನು.

ನಂತರ ಯೇಹು ಹೊರಬಂದು, ಯೆಹೋನಾದಾ
ಬನನ್ನು ರಥದೊಳಕ್ಕೆ ಎಳೆದುಕೊಂಡನು.

[16]ಯೇಹು, ‘‘ನನ್ನ ಸಂಗಡ ಬಾ. ಯೆಹೋವನಲ್ಲಿ
ನನಗಿರುವ ಆಸಕ್ತಿಯನ್ನು ನೀನು ನೋಡುವಿಯಂತೆ’’
ಎಂದು ಹೇಳಿದನು. ಯೇಹುವಿನ ರಥದಲ್ಲಿ ಯೆಹೋನಾ
ದಾಬನೂ ಹೋದನು. [17]ಯೇಹು ಸಮಾರ್ಯಕ್ಕೆ
ಬಂದು, ಅಹಾಬನ ಕುಟುಂಬದಲ್ಲಿ ಜೀವಸಹಿತನಾಗಿ
ಸಮಾರ್ಯದಲ್ಲಿ ಉಳಿದಿದ್ದವರನ್ನೆಲ್ಲಾ ಕೊಂದು ಹಾಕಿ
ದನು. ಯೆಹೋವನು ಎಲೀಯನಿಗೆ ಹೇಳಿದ್ದಂತೆಯೇ
ಯೇಹು ಮಾಡಿದನು.

### ಯೇಹು ಬಾಳನ ಭಕ್ತರನ್ನು ಕರೆದನು

[18]ಯೇಹು ಜನರನ್ನೆಲ್ಲ ಒಟ್ಟಾಗಿ ಸೇರಿಸಿ, ‘‘ಅಹಾಬನು
ಬಾಳನನ್ನು ಸ್ವಲ್ಪ ಮಾತ್ರ ಸೇವಿಸಿದನು. ಆದರೆ ಯೇಹು
ಬಾಳನನ್ನು ಅಧಿಕವಾಗಿ ಸೇವಿಸುತ್ತಾನೆ! [19]ಬಾಳನ ಎಲ್ಲಾ
ಯಾಜಕರನ್ನೂ ಪ್ರವಾದಿಗಳನ್ನೂ ಕರೆಯಿರಿ. ಬಾಳನನ್ನು
ಆರಾಧಿಸುವ ಜನರೆಲ್ಲರನ್ನೂ ಒಟ್ಟಾಗಿ ಕರೆಯಿರಿ.
ಯಾರೂ ಈ ಸಭೆಯಿಂದ ತಪ್ಪಿಸಿಕೊಳ್ಳದಂತೆ ನೋಡಿ
ಕೊಳ್ಳಿ. ನಾನು ಬಾಳನಿಗೆ ಮಹಾಯಜ್ಞವನ್ನು ಅರ್ಪಿಸ
ಬೇಕೆಂದಿದ್ದೇನೆ. ಈ ಸಭೆಗೆ ಯಾರಾದರೂ ಬಾರದೆ ಇದ್ದರೆ
ಅವರನ್ನು ನಾನು ಕೊಂದುಹಾಕುತ್ತೇನೆ!’’ ಎಂದು
ಹೇಳಿದನು.

ಆದರೆ ಅದು ಯೇಹುವಿನ ತಂತ್ರವಾಗಿತ್ತು. ಬಾಳನ
ಭಕ್ತರನ್ನು ನಾಶಪಡಿಸಬೇಕೆಂಬುದೇ ಅವನ ಅಪೇಕ್ಷೆ
ಯಾಗಿತ್ತು. [20]ಯೇಹುವು,‘‘ಬಾಳನಿಗೆ ಒಂದು ಪವಿತ್ರ
ಸಭೆಯನ್ನು ಸೇರಿಸಿರಿ’’ ಎಂದು ಹೇಳಿದನು. [21]ಬಳಿಕ
ಅವನು ಇಸ್ರೇಲಿನ ಪ್ರದೇಶದಲ್ಲೆಲ್ಲಾ ಒಂದು ಸಂದೇಶ
ವನ್ನು ಕಳುಹಿಸಿದನು. ಬಾಳನ ಆರಾಧಕರೆಲ್ಲರೂ
ಬಂದರು. ಮನೆಯಲ್ಲಿ ಯಾರೂ ಉಳಿಯಲಿಲ್ಲ. ಬಾಳನ
ಆರಾಧಕರೆಲ್ಲ ಬಾಳನ ಆಲಯಕ್ಕೆ ಬಂದರು. ಜನರಿಂದ
ಆಲಯವು ತುಂಬಿಹೋಯಿತು.

[22]ಯೇಹು ನಿಲುವಂಗಿಗಳ ಮೇಲ್ವಿಚಾರಕನಿಗೆ,
‘‘ಬಾಳನ ಭಕ್ತರಿಗೆಲ್ಲ ನಿಲುವಂಗಿಗಳನ್ನು ತಂದುಕೊಡು’’
ಎಂದು ಹೇಳಿದನು. ಅವನು ಬಾಳನ ಭಕ್ತರಿಗೆ ನಿಲು
ವಂಗಿಗಳನ್ನು ತಂದುಕೊಟ್ಟನು.

[23]ಆಗ ಯೇಹು ಮತ್ತು ರೇಕಾಬನ ಮಗನಾದ
ಯೆಹೋನಾದಾಬನು ಬಾಳನ ಆಲಯದೊಳಕ್ಕೆ

ಹೋದರು. ಯೇಹು ಬಾಳನ ಭಕ್ತರಿಗೆ,‘‘ಯೆಹೋವನ
ಸೇವಕರು ಯಾರೂ ನಿಮ್ಮೊಡನೆ ಇಲ್ಲವೆಂಬುದನ್ನು
ಸುತ್ತಲೂ ನೋಡಿ ಖಚಿತಪಡಿಸಿಕೊಳ್ಳಿ. ಬಾಳನ ಭಕ್ತರಾದ
ಜನರು ಮಾತ್ರ ಇಲ್ಲಿದ್ದಾರೆಂಬುದನ್ನು ಖಚಿತಪಡಿಸಿ
ಕೊಳ್ಳಿ’’ ಎಂದು ಹೇಳಿದನು. 24ಬಾಳನ ಆರಾಧಕರು
ಯಜ್ಞಗಳನ್ನು ಮತ್ತು ಸರ್ವಾಂಗಹೋಮಗಳನ್ನು ಅರ್ಪಿ
ಸಲು ಬಾಳನ ಆಲಯದೊಳಕ್ಕೆ ಹೋದರು.

ಆದರೆ ಹೊರಗಡೆ ಯೇಹುವಿನ ಎಂಭತ್ತು ಜನರು
ಕಾಯುತ್ತಿದ್ದರು. ಯೇಹು ಅವರಿಗೆ, ‘‘ಯಾರೂ ತಪ್ಪಿಸಿ
ಕೊಂಡು ಹೋಗಲು ಬಿಡಬೇಡಿ. ಯಾರಾದರೂ ಒಬ್ಬ
ಮನುಷ್ಯನನ್ನು ತಪ್ಪಿಸಿಕೊಂಡು ಹೋಗಲು ಬಿಟ್ಟರೆ,
ಅವನು ತನ್ನ ಜೀವವನ್ನು ಬೆಲೆಯಾಗಿ ಕೊಡ
ಬೇಕಾಗುತ್ತದೆ’’ ಎಂದು ಹೇಳಿದನು.

25ಯೇಹುವು ಸರ್ವಾಂಗಹೋಮಗಳನ್ನು ಅರ್ಪಿಸಿದ
ತಕ್ಷಣ, ಕಾವಲುಗಾರರಿಗೂ ಸೇನಾಧಿಪತಿಗಳಿಗೂ,
‘‘ಒಳಕೋಣೆಗೆ* ಹೋಗಿ ಬಾಳನ ಆರಾಧಕರನ್ನೆಲ್ಲ
ಕೊಂದುಹಾಕಿ! ಜೀವಸಹಿತ ಯಾರೂ ಆಲಯದಿಂದ
ಹೊರಕ್ಕೆ ಬರಲು ಬಿಡಬೇಡಿ!’’ ಎಂದು ಹೇಳಿದನು.

ಸೇನಾಧಿಪತಿಗಳು ಚೂಪಾದ ಖಡ್ಗದಿಂದ ಬಾಳನ
ಭಕ್ತರನ್ನೆಲ್ಲ ಕೊಂದುಹಾಕಿದರು. ಬಾಳನ ಭಕ್ತರ
ದೇಹಗಳನ್ನು ಕಾವಲುಗಾರರು ಮತ್ತು ಸೇನಾಧಿಪತಿಗಳು
ಹೊರಕ್ಕೆ ಎಸೆದರು. ನಂತರ ಆ ಕಾವಲುಗಾರರು ಮತ್ತು
ಸೇನಾಧಿಪತಿಗಳು ಬಾಳನ ಆಲಯದ ಒಳಕೋಣೆಯನ್ನು
ಪ್ರವೇಶಿಸಿದರು. 26ಅವರು ಬಾಳನ ಆಲಯದಲ್ಲಿದ್ದ
ಸ್ಮಾರಕಸ್ತಂಭಗಳನ್ನು* ಹೊರತಂದು, ಆಲಯವನ್ನು
ಸುಟ್ಟುಹಾಕಿದರು. ನಂತರ ಅವರು ಬಾಳನ ಸ್ಮಾರಕ
ಸ್ತಂಭಗಳನ್ನು ಚೂರುಚೂರು ಮಾಡಿದರು. 27ಬಾಳನ
ಆಲಯವನ್ನೂ ಅವರು ಹಾಳುಗೆಡವಿದರು. ಅವರು
ಬಾಳನ ಆಲಯವನ್ನು ಶೌಚಗೃಹವನ್ನಾಗಿ ಮಾಡಿದರು.
ಇಂದೂ ಸಹ ಅದನ್ನು ಶೌಚಗೃಹವಾಗಿ ಬಳಸುತ್ತಾರೆ.

28ಯೇಹುವು ಇಸ್ರೇಲಿನಲ್ಲಿ ಬಾಳನ ಪೂಜೆಯನ್ನು
ನಿಲ್ಲಿಸಿದನು.

29ಆದರೂ ಇಸ್ರೇಲಿನ ಪಾಪಗಳಿಗೆ ಪ್ರೇರಕನಾದ,
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಗಳಿಂದ
ಯೇಹುವು ಸಂಪೂರ್ಣವಾಗಿ ವಿಮುಖನಾಗಲಿಲ್ಲ,
ಬೇತೇಲ್ ಮತ್ತು ದಾನ್‌ಗಳಲ್ಲಿದ್ದ ಬಂಗಾರದ ಕರು
ಗಳನ್ನು ಯೇಹುವು ನಾಶಗೊಳಿಸಲಿಲ್ಲ.

### ಇಸ್ರೇಲನ್ನು ಯೇಹು ಆಳುವನು

30ಯೆಹೋವನು ಯೇಹುವಿಗೆ, ’’ನೀನು ಒಳ್ಳೆಯ
ದನ್ನು ಮಾಡಿದೆ. ನಾನು ಒಳ್ಳೆಯದೆಂದು ಹೇಳಿದ್ದನ್ನೇ
ನೀನು ಮಾಡಿದೆ. ನನ್ನ ಅಪೇಕ್ಷೆಯಂತೆ ನೀನು ಅಹಾಬನ
ಕುಟುಂಬವನ್ನು ನಾಶಗೊಳಿಸಿದೆ. ಆದ್ದರಿಂದ ನಿನ್ನ
ಸಂತತಿಯವರು ಇಸ್ರೇಲನ್ನು ನಾಲ್ಕು ತಲೆಮಾರುಗಳ
ವರೆಗೆ ಆಳುತ್ತಾರೆ’’ ಎಂದು ಹೇಳಿದನು.

31ಆದರೆ ಯೇಹು ಇಸ್ರೇಲಿನ ದೇವರಾದ ಯೆಹೋ
ವನ ನಿಯಮಗಳನ್ನು ಪೂರ್ಣಮನಸ್ಸಿನಿಂದಲೂ ಎಚ್ಚರಿಕೆ
ಯಿಂದಲೂ ಪಾಲಿಸಲಿಲ್ಲ. ಇಸ್ರೇಲಿನ ಪಾಪಗಳಿಗೆ ಪ್ರೇರಕ
ನಾದ ಯಾರೊಬ್ಬಾಮನ ಪಾಪಗಳನ್ನು ಯೇಹುವು
ಮಾಡುವುದನ್ನು ನಿಲ್ಲಿಸಲೇ ಇಲ್ಲ.

### ಹಜಾಯೇಲನು ಇಸ್ರೇಲನ್ನು ಸೋಲಿಸಿದನು.

32ಆ ಸಮಯದಲ್ಲಿ, ಯೆಹೋವನು ಇಸ್ರೇಲಿನ ಭಾಗ
ಗಳನ್ನು ಕುಗ್ಗಿಸತೊಡಗಿದನು. ಅರಾಮ್ಯರ ರಾಜನಾದ
ಹಜಾಯೇಲನು ಇಸ್ರೇಲಿನ ಪ್ರತಿಯೊಂದು ಗಡಿ
ಯಲ್ಲಿಯೂ ಇಸ್ರೇಲರನ್ನು ಸೋಲಿಸುತ್ತಿದ್ದನು. 33ಹಜಾ
ಯೇಲನು ಜೋರ್ಡನ್ ನದಿಯ ಪೂರ್ವಕ್ಕಿರುವ
ಪ್ರದೇಶವನ್ನೆಲ್ಲ ಗೆದ್ದುಕೊಂಡನು. ಅವನು ಗಾದ್,
ರೂಬೇನ್ ಮತ್ತು ಮನಸ್ಸೆ ಕುಲಗಳಿಗೆ ಸೇರಿದ ಎಲ್ಲಾ
ಪ್ರದೇಶವನ್ನೂ, ಗಿಲ್ಯಾದ್‌ನ ಎಲ್ಲ ಪ್ರದೇಶವನ್ನೂ
ಗೆದ್ದನು. ಹಜಾಯೇಲನು ಆರ್ನೋನ್ ಕಣಿವೆಯಿಂದ
ಗಿಲ್ಯಾದ್, ಬಾಷಾನ್‌ವರೆಗಿನ ಅರೋಯೇರ್ ಪ್ರದೇಶ
ವನ್ನೆಲ್ಲ ಗೆದ್ದುಕೊಂಡನು.

### ಯೇಹುವಿನ ಸಾವು

34‘ಇಸ್ರೇಲಿನ ರಾಜರುಗಳ ಇತಿಹಾಸ’ ಎಂಬ ಪುಸ್ತಕ
ದಲ್ಲಿ ಯೇಹು ಮಾಡಿದ ಇತರ ಉತ್ತಮ ಕಾರ್ಯಗಳನ್ನೆಲ್ಲ
ಬರೆಯಲಾಗಿದೆ. 35ಯೇಹು ಸತ್ತುಹೋದನು. ಅವನನ್ನು
ಅವನ ಪೂರ್ವಿಕರ ಬಳಿ ಸಮಾರ್ಯದಲ್ಲಿ ಸಮಾಧಿ
ಮಾಡಿದರು. ಯೇಹುವಿನ ನಂತರ ಅವನ ಮಗನಾದ
ಯೇಹೋವಾಹಾಜನು ಇಸ್ರೇಲಿನ ನೂತನ ರಾಜ
ನಾದನು. 36ಯೇಹುವು ಸಮಾರ್ಯದಲ್ಲಿ ಇಸ್ರೇಲನ್ನು
ಇಪ್ಪತ್ತೆಂಟು ವರ್ಷ ಆಳಿದನು.

### ಯೆಹೂದದಲ್ಲಿ ರಾಜನ ಮಕ್ಕಳನ್ನೆಲ್ಲ ಅತಲ್ಯಳು ನಾಶಗೊಳಿಸಿದಳು

11 ಅಹಜ್ಯನ ತಾಯಿಯಾದ ಅತಲ್ಯಳು ತನ್ನ ಮಗ
ಸತ್ತದ್ದನ್ನು ನೋಡಿದಳು. ಅವಳು ಮೇಲೆದ್ದು
ರಾಜನ ಕುಟುಂಬವನ್ನೆಲ್ಲ ಕೊಂದುಬಿಟ್ಟಳು.

2ಯೆಹೋಷೆಬಳು ರಾಜನಾದ ಯೋರಾಮನ ಮಗ
ಳಾಗಿದ್ದಳು ಮತ್ತು ಅಹಜ್ಯನ ಸೋದರಿಯಾಗಿದ್ದಳು.

---

**ಒಳಕೋಣೆ** ಅಕ್ಷರಶಃ, ‘‘ಬಾಳನ ದೇವಾಲಯದ ಪಟ್ಟಣ.’’

**ಸ್ಮಾರಕಸ್ತಂಭ** ಜನರು ವಿಶೇಷವಾದದ್ದನ್ನು ನೆನಪು ಮಾಡಿಕೊಳ್ಳಲು ಸಹಾಯಕವಾಗುವಂತೆ ಕಲ್ಲುಗಳನ್ನು ನಿಲ್ಲಿಸುತ್ತಿದ್ದರು. ಪೂರ್ವಕಾಲದ ಇಸ್ರೇಲಿನಲ್ಲಿ ಜನರು ಆಗಾಗ್ಗೆ ಸುಳ್ಳು ದೇವತೆಗಳ ಆರಾಧನೆಗಾಗಿ ಕಲ್ಲುಗಳನ್ನು ವಿಶೇಷ ಸ್ಥಳಗಳಲ್ಲಿ ನಿಲ್ಲಿಸುತ್ತಿದ್ದರು.

ಯೆಹೋವಾಷನು ರಾಜನ ಮಕ್ಕಳಲ್ಲಿ ಒಬ್ಬನಾಗಿದ್ದನು. ಅತಲ್ಯಳು ಇತರ ಮಕ್ಕಳನ್ನು ಕೊಲ್ಲುವಾಗ ಯೆಹೋಷೆಬಳು ಯೆಹೋವಾಷನನ್ನು ತೆಗೆದುಕೊಂಡು ಹೋದಳು. ಅವಳು ಯೆಹೋವಾಷನನ್ನು ಮತ್ತು ಅವನ ದಾದಿಯನ್ನು ತನ್ನ ಮಲಗುವ ಕೊಠಡಿಯಲ್ಲಿ ಅಡಗಿಸಿದಳು. ಯೆಹೋವಾಷನನ್ನು ಅವನ ದಾದಿಯು ಮತ್ತು ಯೆಹೋಷೆಬಳು ಅತಲ್ಯಳಿಂದ ತಪ್ಪಿಸಿ ಅಡಗಿಸಿಟ್ಟರು. ಈ ರೀತಿ ಯೆಹೋವಾಷನನ್ನು ಕೊಲ್ಲಲಾಗಲಿಲ್ಲ.

[3]ನಂತರ ಯೆಹೋವಾಷ ಮತ್ತು ಯೆಹೋಷೆಬಳು ಯೆಹೋವನ ಆಲಯದಲ್ಲಿ ಅಡಗಿಕೊಂಡರು. ಯೆಹೋವಾಷನು ಆರು ವರ್ಷಗಳ ಕಾಲ ಅಡಗಿಕೊಂಡಿದ್ದನು. ಅತಲ್ಯಳು ಯೆಹೂದ ದೇಶವನ್ನು ಆಳಿದಳು.

[4]ಏಳನೆ ವರ್ಷದಲ್ಲಿ, (ಪ್ರಧಾನ ಯಾಜಕನಾದ) ಯೆಹೋಯಾದಾವನು ಕೇರೇತ್ಯರ ಸೇನಾಧಿಪತಿಗಳನ್ನು ಮತ್ತು ಕಾವಲುಗಾರರನ್ನು ಕರೆಸಿಕೊಂಡನು. ಯೆಹೋಯಾದಾವನು ಅವರನ್ನೆಲ್ಲ ಯೆಹೋವನ ಆಲಯದಲ್ಲಿ ಒಟ್ಟಾಗಿ ಸೇರಿಸಿದನು. ನಂತರ ಯೆಹೋಯಾದಾವನು ಅವರೊಡನೆ ಒಂದು ಒಪ್ಪಂದವನ್ನು ಮಾಡಿಕೊಂಡನು. ಯೆಹೋಯಾದಾವನು ಆಲಯದಲ್ಲಿ ಅವರು ವಾಗ್ದಾನ ಮಾಡುವಂತೆ ಬಲಾತ್ಕಾರಗೊಳಿಸಿದನು. ನಂತರ ಅವನು ಅವರಿಗೆ ರಾಜನ ಮಗನನ್ನು (ಯೆಹೋವಾಷನನ್ನು) ತೋರಿಸಿದನು.

[5]ಯೆಹೋಯಾದಾವನು ಅವರಿಗೆ, ''ನೀವು ಈ ಕಾರ್ಯವನ್ನು ಮಾಡಲೇಬೇಕು. ನಿಮ್ಮಲ್ಲಿ ಸಬ್ಬತ್ ದಿನದಂದು ಬರುವ ಮೂರನೆ ಒಂದು ಭಾಗದ ಜನರು ರಾಜನನ್ನು ಅವನ ಅರಮನೆಯಲ್ಲಿ ರಕ್ಷಿಸಬೇಕು.
[6]ಇನ್ನೊಂದು ಮೂರನೆಯ ಒಂದು ಭಾಗವು ಸೂರ್ ಬಾಗಿಲಿನಲ್ಲಿರಬೇಕು. ಮತ್ತೊಂದು ಮೂರನೆಯ ಒಂದು ಭಾಗವು ಕಾವಲುಗಾರನ ಹಿಂದೆ ಬಾಗಿಲಿನಲ್ಲಿರಬೇಕು. ಈ ರೀತಿ ನೀವು ಗೋಡೆಯಂತೆ ನಿಂತು ಯೆಹೋವಾಷ
ನನ್ನು ರಕ್ಷಿಸುತ್ತಿರಬೇಕು. [7]ಸಬ್ಬತ್ ದಿನದಂದು ಕಾಯಲು ಬರುವ ನಿಮ್ಮೆಲ್ಲರ ಎರಡು ಪಡೆಗಳು ಯೆಹೋವನ ಆಲಯವನ್ನು ಕಾಯುತ್ತಾ ರಾಜನಾದ ಯೆಹೋವಾಷ
ನನ್ನು ಕಾಯಬೇಕು. [8]ರಾಜನಾದ ಯೆಹೋವಾಷನು ಎಲ್ಲಿಗಾದರೂ ಯಾವಾಗಲಾದರೂ ಹೋದರೆ ಅವನೊಂದಿಗೆ ನೀವು ಇರಲೇಬೇಕು. ನೀವೆಲ್ಲರೂ ರಾಜನನ್ನು ಸುತ್ತುವರಿದಿರಬೇಕು. ಪ್ರತಿಯೊಬ್ಬ ಕಾವಲುಗಾರನೂ ಆಯುಧವನ್ನು ತನ್ನ ಕೈಯಲ್ಲಿ ಹಿಡಿದಿರಲೇಬೇಕು. ನಿಮ್ಮ ಸಮೀಪಕ್ಕೆ ಯಾರಾದರೂ ಬಂದರೆ ಅವರನ್ನು ಕೊಲ್ಲಬೇಕು'' ಎಂದನು.

[9]ಯಾಜಕನಾದ ಯೆಹೋಯಾದಾವನು ಆಜ್ಞಾಪಿಸಿದ ಸಂಗತಿಗಳಿಗೆಲ್ಲ ಸೇನಾಧಿಪತಿಗಳು ವಿಧೇಯರಾಗಿದ್ದರು. ಪ್ರತಿಯೊಬ್ಬ ಸೇನಾಧಿಪತಿಯೂ ತನ್ನ ಕಾವಲುಗಾರರನ್ನು ಅಂದರೆ ಸಬ್ಬತ್ ದಿನದಂದು ಕಾಯಲು ಬರಬೇಕಾಗಿದ್ದ ಮತ್ತು ಸಬ್ಬತ್ ದಿನದಂದು ಕೆಲಸದಿಂದ ಹೋಗ ಬೇಕಾಗಿದ್ದ ಸಿಪಾಯಿಗಳನ್ನು ಕರೆದೊಯ್ದನು. ಅವರೆಲ್ಲರೂ ಯಾಜಕನಾದ ಯೆಹೋಯಾದಾವನ ಹತ್ತಿರಕ್ಕೆ ಹೋದರು. [10]ಸೇನಾಧಿಪತಿಗಳಿಗೆ ಬರ್ಜಿಗಳನ್ನು ಮತ್ತು ಗುರಾಣಿಗಳನ್ನು ಯಾಜಕನು ಕೊಟ್ಟನು. ರಾಜನಾದ ದಾವೀದನು ಯೆಹೋವನ ಆಲಯದಲ್ಲಿ ಈ ಬರ್ಜಿಗಳನ್ನು ಮತ್ತು ಗುರಾಣಿಗಳನ್ನು ಇಟ್ಟಿದ್ದನು. [11]ಈ
ಕಾವಲುಗಾರರು ಆಲಯದ ಬಲಗಡೆಯ ಮೂಲೆಯಿಂದ ಎಡಗಡೆಯ ಮೂಲೆಯವರೆಗೆ ತಮ್ಮ ಕೈಗಳಲ್ಲಿ ಆಯುಧಗಳನ್ನು ಹಿಡಿದುಕೊಂಡು ನಿಂತರು. ರಾಜನು ಆಲಯದೊಳಕ್ಕೆ ಹೋದಾಗ ಅವರು ಅವನ ಸುತ್ತಲೂ, ಯಜ್ಞವೇದಿಕೆಯ ಮತ್ತು ಆಲಯದ ಸುತ್ತಲೂ ನಿಂತುಕೊಂಡರು.

[12]ಈ ಜನರು ಯೆಹೋವಾಷಾನನ್ನು ಹೊರಗೆ ತಂದರು. ಅವರು ಯೆಹೋವಾಷನ ಮೇಲೆ ಕಿರೀಟವನ್ನಿಟ್ಟು ಕೈಯಲ್ಲಿ ಧರ್ಮಶಾಸ್ತ್ರವನ್ನು ಕೊಟ್ಟರು. ನಂತರ ಅವರು ಅವನನ್ನು ಅಭಿಷೇಕಿಸಿ, ನೂತನ ರಾಜನನ್ನಾಗಿ ಮಾಡಿದರು. ಅವರು ಚಪ್ಪಾಳೆ ತಟ್ಟುತ್ತಾ 'ರಾಜನು ಚಿರಂಜೀವಿಯಾಗಿರಲಿ!'' ಎಂದು ಆರ್ಭಟಿಸಿದರು.

[13]ಕಾವಲುಗಾರರ ಮತ್ತು ಜನರ ಗದ್ದಲವು ರಾಣಿಯಾದ ಅತಲ್ಯಳಿಗೆ ಕೇಳಿಸಿತು. ಅವಳು ಯೆಹೋವನ ಆಲಯದಲ್ಲಿದ್ದ ಜನರ ಬಳಿಗೆ ಹೋದಳು. [14]ರಾಜನು
ಪದ್ಧತಿಯಂತೆ ಸ್ತಂಭದ ಬಳಿ ನಿಂತಿರುವುದನ್ನೂ ಜನರು ಮತ್ತು ನಾಯಕರು ರಾಜನಿಗಾಗಿ ತುತ್ತೂರಿ ಊದುತ್ತಿರುವುದನ್ನೂ ಜನರೆಲ್ಲರೂ ಬಹಳ ಸಂತೋಷದಿಂದಿರುವುದನ್ನೂ ಅವಳು ನೋಡಿ ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು ''ದ್ರೋಹ, ದ್ರೋಹ!'' ಎಂದು ಕೂಗಿಕೊಂಡಳು.

[15]ಯಾಜಕನಾದ ಯೆಹೋಯಾದಾವನು ಸೈನಿಕರ ಮೇಲ್ವಿಚಾರಕರಾದ ಸೇನಾಧಿಪತಿಗಳಿಗೆ ಆಜ್ಞಾಪಿಸಿದನು. ಯೆಹೋಯಾದಾವನು ಅವರಿಗೆ, ''ಅತಲ್ಯಳನ್ನು ಆಲಯದ ಆವರಣದಿಂದ ಹೊರಗೆ ತೆಗೆದುಕೊಂಡು ಹೋಗಿ. ಅವಳ ಹಿಂಬಾಲಕರು ಯಾರೇ ಆಗಿದ್ದರೂ ಕೊಂದುಬಿಡಿ. ಆದರೆ ಅವರನ್ನು ಯೆಹೋವನ ಆಲಯದಲ್ಲಿ ಕೊಲ್ಲಬೇಡಿ'' ಎಂದು ಹೇಳಿದನು.

[16]ಆದ್ದರಿಂದ ಸೈನಿಕರು ಅವಳನ್ನು ಹಿಡಿದುಕೊಂಡು ಹೊರಗೆ ಕರೆದೊಯ್ದರು, ಆಕೆಯು ಕುದುರೆಗಳ ಪ್ರವೇಶದ್ವಾರದ ಮೂಲಕ ಅರಮನೆಗೆ ಹೋದಳು. ಸೈನಿಕರು ಅತಲ್ಯಳನ್ನು ಅಲ್ಲಿ ಕೊಂದುಹಾಕಿದರು.

[17]ಅನಂತರ ಯೆಹೋಯಾದಾವನ ಪ್ರೇರಣೆಯಿಂದ ಅರಸನೂ ಪ್ರಜೆಗಳೂ ತಾವು ಯೆಹೋವನ ಪ್ರಜೆಗಳಾಗಿರುವುದಾಗಿ ಆತನಿಗೆ ಪ್ರಮಾಣಮಾಡಿದರು.

18ಆಗ ಜನರೆಲ್ಲರೂ ಸುಳ್ಳುದೇವರಾದ ಬಾಳನ ಗುಡಿಗೆ
ಹೋಗಿ ಬಾಳನ ವಿಗ್ರಹವನ್ನೂ ಮತ್ತು ಅವನ ಯಜ್ಞ
ವೇದಿಕೆಯನ್ನೂ ಚೂರುಚೂರು ಮಾಡಿದರು. ಬಾಳನ
ಯಾಜಕನಾದ ಮತ್ತಾನನನ್ನು ಜನರು ಯಜ್ಞವೇದಿಕೆಯ
ಎದುರಿನಲ್ಲಿಯೇ ಕೊಂದುಹಾಕಿದರು.

ಯಾಜಕನಾದ ಯೆಹೋಯಾದಾವನು ಯೆಹೋವನ
ಆಲಯಕ್ಕೆ ಕಾವಲುಗಾರರನ್ನು ನೇಮಿಸಿದನು. 19ಯಾಜ
ಕನು ಜನರನ್ನೆಲ್ಲ ಕರೆದುಕೊಂಡು ಹೋದನು. ಅವರು
ಸಿಪಾಯಿಗಳ ದ್ವಾರದ ಮೂಲಕ ಅರಮನೆಗೆ ಹೋದರು.
ರಾಜನ ವಿಶೇಷ ಅಂಗರಕ್ಷಕರು ಮತ್ತು ಸೇನಾಧಿಪತಿಗಳು
ರಾಜನ ಜೊತೆಯಲ್ಲಿ ಹೋದರು. ಅವರನ್ನು ಇತರ
ಜನರೆಲ್ಲರೂ ಹಿಂಬಾಲಿಸಿದರು. ಅವರು ರಾಜನ ಅರ
ಮನೆಯ ಬಾಗಿಲಿಗೆ ಹೋದರು. ನಂತರ ರಾಜನಾದ
ಯೆಹೋವಾಷನು ಸಿಂಹಾಸನದ ಮೇಲೆ ಕುಳಿತು
ಕೊಂಡನು. 20ಜನರೆಲ್ಲರೂ ಬಹಳ ಹರ್ಷಗೊಂಡರು.
ನಗರದಲ್ಲಿ ಸಮಾಧಾನವಿತ್ತು. ರಾಜನ ಅರಮನೆಯ
ಹತ್ತಿರ ರಾಣಿಯಾದ ಅತಲ್ಯಳನ್ನು ಖಡ್ಗದಿಂದ ಕೊಂದಿ
ದ್ದರು. 21ಯೆಹೋವಾಷನು ರಾಜನಾದಾಗ ಅವನಿಗೆ ಏಳು
ವರ್ಷ ವಯಸ್ಸಾಗಿತ್ತು.

### ಯೆಹೋವಾಷನು ತನ್ನ ಆಳ್ವಿಕೆಯನ್ನು ಆರಂಭಿಸಿದನು

12 ಯೇಹುವು ಇಸ್ರೇಲಿನ ರಾಜನಾಗಿದ್ದ ಏಳನೆಯ
ವರ್ಷದಲ್ಲಿ ಯೆಹೋವಾಷನು ಆಳಲಾರಂಭಿಸಿ
ದನು. ಯೆಹೋವಾಷನು ಜೆರುಸಲೇಮಿನಲ್ಲಿ ನಲವತ್ತು
ವರ್ಷಆಳಿದನು. ಬೇರ್ಷೆಬದ ಚಿಬ್ಯಳು ಯೆಹೋವಾಷನ
ತಾಯಿ. 2ಯೆಹೋವಾಷನು ಯೆಹೋವನು ಸರಿಯೆಂದು
ಹೇಳಿದ ಕಾರ್ಯಗಳನ್ನು ಮಾಡಿದನು. ಯೆಹೋವಾಷನು
ತನ್ನ ಜೀವಮಾನವೆಲ್ಲ ಯೆಹೋವನಿಗೆ ವಿಧೇಯನಾ
ಗಿದ್ದನು. ಯಾಜಕನಾದ ಯೆಹೋಯಾದಾವನು ಉಪ
ದೇಶಿಸಿದ್ದ ಕಾರ್ಯಗಳನ್ನೆಲ್ಲ ಯೆಹೋವಾಷನು ಮಾಡಿ
ದನು. 3ಆದರೆ ಅವನು ಉನ್ನತ ಪೂಜಾಸ್ಥಳಗಳನ್ನು
ನಾಶಗೊಳಿಸಲಿಲ್ಲ. ಜನರು ಇನ್ನೂ ಆ ಸ್ಥಳಗಳಲ್ಲಿ
ಯಜ್ಞಗಳನ್ನು ಅರ್ಪಿಸುತ್ತಾರೆ ಮತ್ತು ಧೂಪಗಳನ್ನು
ಸುಡುತ್ತಾರೆ.

### ದೇವಾಲಯವನ್ನು ಸರಿಪಡಿಸಲು ಯೆಹೋವಾಷನ ಆಜ್ಞೆ

4-5ಯೆಹೋವಾಷನು ಯಾಜಕರಿಗೆ, ‘‘ದೇವಾಲಯ
ದಲ್ಲಿ ಬಹಳ ಹಣವಿದೆ. ಜನರು ಅನೇಕ ವಸ್ತುಗಳನ್ನು
ಆಲಯಕ್ಕೆ ಕೊಟ್ಟಿದ್ದಾರೆ. ಜಣಗಣತಿಯಲ್ಲಿ ಲೆಕ್ಕಿಸಲ್ಪಟ್ಟ
ಜನರು ಆಲಯದ ತೆರಿಗೆಯನ್ನು ಕೊಟ್ಟಿದ್ದಾರೆ. ಜನರು
ತಮ್ಮ ಸ್ವಇಚ್ಛೆಯಿಂದ ಹಣವನ್ನು ಕೊಟ್ಟಿದ್ದಾರೆ. ಯಾಜಕ
ರಾದ ನೀವು ಆ ಹಣವನ್ನು ತೆಗೆದುಕೊಂಡು, ಯೆಹೋ
ವನ ಆಲಯವನ್ನು ಸರಿಪಡಿಸಿ. ಪ್ರತಿಯೊಬ್ಬ ಯಾಜಕನೂ
ತಾನು ಜನರ ಸೇವೆಯಿಂದ ಪಡೆದ ಹಣವನ್ನು ಉಪಯೋ
ಗಿಸಲೇಬೇಕು. ಅವನು ಆ ಹಣವನ್ನು ದೇವಾಲಯದ
ಶಿಥಿಲತೆಯನ್ನು ಸರಿಪಡಿಸಲು ಉಪಯೋಗಿಸಲೇ
ಬೇಕು’’ ಎಂದು ಹೇಳಿದನು.

6ಆದರೆ ಯಾಜಕರು ಸರಿಪಡಿಸಲಿಲ್ಲ. ಯೆಹೋವಾ
ಷನು ರಾಜನಾದ ಇಪ್ಪತ್ತಮೂರನೆಯ ವರ್ಷದಲ್ಲಿ,
ಯಾಜಕರಿನ್ನೂ ದೇವಾಲಯವನ್ನು ಸರಿಪಡಿಸಲಿಲ್ಲ.
7ಆದ್ದರಿಂದ ರಾಜನಾದ ಯೆಹೋವಾಷನು ಯಾಜಕ
ನಾದ ಯೆಹೋಯಾದಾವ ಮತ್ತು ಇತರ ಯಾಜಕರನ್ನು
ಕರೆಸಿ, ‘‘ನೀವು ಆಲಯವನ್ನು ಸರಿಪಡಿಸಲಿಲ್ಲವೇಕೆ?
ನಿಮ್ಮಿಂದ ಸೇವೆ ಹೊಂದುವ ಜನರು ಕೊಡುವ ಹಣವನ್ನು
ಉಪಯೋಗಿಸಬೇಡಿ. ಆಲಯವನ್ನು ಸರಿಪಡಿಸುವುದ
ಕ್ಕಾಗಿ ಆ ಹಣವನ್ನು ಉಪಯೋಗಿಸಬೇಕು’’ ಎಂದು
ಹೇಳಿದನು.

8ಆಗ ಯಾಜಕರು ಅವನಿಗೆ, ‘‘ನಾವು ಜನರಿಂದ ಹಣ
ತೆಗೆದುಕೊಳ್ಳುವುದಿಲ್ಲ ಮತ್ತು ಆಲಯವನ್ನು ಸರಿಪಡಿ
ಸುವುದಕ್ಕೆ ಕೈಹಾಕುವುದಿಲ್ಲ’’ ಎಂದು ಹೇಳಿದರು.
9ಯಾಜಕನಾದ ಯೆಹೋಯಾದಾವನು ಒಂದು ಪೆಟ್ಟಿಗೆ
ಯನ್ನು ತೆಗೆದುಕೊಂಡು, ಅದರ ಮೇಲೆ ಒಂದು ತೂತು
ಮಾಡಿದನು. ನಂತರ ಯೊಹೋಯಾದಾವನು ಆ ಪೆಟ್ಟಿಗೆ
ಯನ್ನು ಯಜ್ಞವೇದಿಕೆಯ ಬಲಗಡೆಯಲ್ಲಿ ಇಟ್ಟನು.
ದೇವಾಲಯಕ್ಕೆ ಜನರು ಬರುವ ಬಾಗಿಲಿನಲ್ಲಿ ಈ
ಪೆಟ್ಟಿಗೆಯಿತ್ತು. ಕೆಲವು ಮಂದಿ ಯಾಜಕರು ಆಲಯದ
ಬಾಗಿಲಿನಲ್ಲಿ ರಕ್ಷಕರಾಗಿ ನಿಂತರು. ಆ ಯಾಜಕರು ಜನರು
ಯೆಹೋವನಿಗೆಂದು ಕೊಡುವ ಆ ಹಣವನ್ನು ಪೆಟ್ಟಿಗೆ
ಯಲ್ಲಿ ಹಾಕಿದರು.

10ಜನರು ದೇವಾಲಯಕ್ಕೆ ಹೋದಾಗ ಆ ಪೆಟ್ಟಿಗೆಯಲ್ಲಿ
ಹಣವನ್ನು ಹಾಕಲಾರಂಭಿಸಿದರು. ರಾಜನ ಕಾರ್ಯ
ದರ್ಶಿಯಾಗಲೀ, ಪ್ರಧಾನ ಯಾಜಕನಾಗಲೀ ನೋಡಿ
ದಾಗ ಸಾಕಷ್ಟು ಹಣವು ತುಂಬಿದ್ದರೆ ಅದನ್ನು ಲೆಕ್ಕಹಾಕಿ
ಚೀಲಗಳಲ್ಲಿ ತುಂಬಿಡುತ್ತಿದ್ದರು. 11ನಂತರ ಅವರು ಆ
ಹಣದಿಂದ ದೇವಾಲಯದ ಕೆಲಸಗಾರರಿಗೂ ಬಡಗಿ
ಗಳಿಗೂ ಮತ್ತು ದೇವಾಲಯದ ಇತರ ಕೆಲಸಗಾರರಿಗೂ
12ಕಲ್ಲುಕುಟಿಕರಿಗೂ ಶಿಲ್ಪಿಗಳಿಗೂ ಸಂಬಳ ಕೊಡುತ್ತಿ
ದ್ದರು. ಅವರು ಆ ಹಣದಿಂದ ಮರವನ್ನೂ ಕೆತ್ತಿದ ಕಲ್ಲು
ಗಳನ್ನೂ ಕೊಂಡುಕೊಂಡರು; ಯೆಹೋವನ ಆಲಯ
ವನ್ನು ಸರಿಪಡಿಸಲು ಇತರ ಕೆಲಸಗಳಿಗೆ ಆ ಹಣವನ್ನು
ಬಳಸುತ್ತಿದ್ದರು.

13-14ಜನರು ದೇವಾಲಯಕ್ಕೆ ಹಣವನ್ನು ಕೊಟ್ಟರು.
ಆದರೆ ಯಾಜಕರು ಆ ಹಣವನ್ನು ಬೆಳ್ಳಿಯ ಬಟ್ಟಲು,
ಕತ್ತರಿ, ಬೋಗುಣಿ, ತುತ್ತೂರಿ ಅಥವಾ ಬೆಳ್ಳಿ
ಬಂಗಾರಗಳ ಪಾತ್ರೆಗಳಿಗೆ ಉಪಯೋಗಿಸದೆ ಕೆಲಸ
ಗಾರರ ವೇತನಕ್ಕೆ ಉಪಯೋಗಿಸಿದರು. ಆ ಕೆಲಸಗಾರರು

ದೇವಾಲಯವನ್ನು ಸರಿಪಡಿಸಿದರು. [15]ಯಾರೂ ಆ ಹಣ
ವನ್ನು ಲೆಕ್ಕ ಹಾಕಲಿಲ್ಲ. ಇಲ್ಲವೆ ಆ ಹಣವೇನಾಯಿತೆಂದು
ಯಾವ ಕೆಲಸಗಾರನನ್ನೂ ಒತ್ತಾಯಿಸಿ ಕೇಳಲಿಲ್ಲ.
ಏಕೆಂದರೆ ಆ ಕೆಲಸಗಾರರು ನಂಬಿಗಸ್ತರಾಗಿದ್ದರು!
[16]ಜನರು ತಮ್ಮ ಅಪರಾಧ ಪ್ರಾಯಶ್ಚಿತ್ತ ಮತ್ತು
ದೋಷಪರಿಹಾರದ ಸಮಯದಲ್ಲಿ ಹಣವನ್ನು ಕೊಟ್ಟರು.
ಆದರೆ ಅಂತಹ ಹಣವನ್ನು ಕೆಲಸಗಾರರ ವೇತನಕ್ಕೆ ಉಪ
ಯೋಗಿಸಲಿಲ್ಲ. ಆ ಹಣವು ಯಾಜಕರಿಗೆ ಸೇರಿತ್ತು.

### ಯೆಹೋವಾಷನು ಹಜಾಯೇಲನಿಂದ ಜೆರುಸಲೇಮನ್ನು ರಕ್ಷಿಸಿದನು

[17]ಹಜಾಯೇಲನು ಅರಾಮ್ಯರ ರಾಜನಾಗಿದ್ದನು.
ಹಜಾಯೇಲನು ಗತ್ ಊರನ್ನು ಸೋಲಿಸಿದನು. ಆಗ
ಅವನು ಜೆರುಸಲೇಮಿನ ವಿರುದ್ಧ ಯುದ್ಧಕ್ಕೆ ಹೋಗಲು
ಯೋಚಿಸಿದನು.
[18]ಯೆಹೋಷಾಫಾಟ್, ಯೆಹೋರಾಮ್ ಮತ್ತು ಅಹ
ಜ್ಯರು ಯೆಹೂದದ ರಾಜರಾಗಿದ್ದರು. ಅವರೆಲ್ಲ
ಯೆಹೋವಾಷನ ಪೂರ್ವಿಕರು. ಅವರು ಅನೇಕ ವಸ್ತು
ಗಳನ್ನು ಯೆಹೋವನಿಗೆ ಕೊಟ್ಟಿದ್ದರು. ಅವುಗಳನ್ನೆಲ್ಲ
ಆಲಯದಲ್ಲಿ ಇಟ್ಟಿದ್ದರು. ಯೆಹೋವಾಷನೂ ಯೆಹೋ
ವನಿಗೆ ಅನೇಕ ವಸ್ತುಗಳನ್ನು ಕೊಟ್ಟಿದ್ದನು. ಯೆಹೋ
ವಾಷನು ಅವುಗಳ ಜೊತೆಗೆ, ಆಲಯದಲ್ಲಿದ್ದ ಮತ್ತು ತನ್ನ
ಮನೆಯಲ್ಲಿದ್ದ ಬಂಗಾರವನ್ನೆಲ್ಲ ತೆಗೆದುಕೊಂಡನು.
ನಂತರ ಯೆಹೋವಾಷನು ಆ ಬೆಲೆಬಾಳುವ ವಸ್ತುಗಳ
ನ್ನೆಲ್ಲ ಅರಾಮ್ಯರ ರಾಜನಾದ ಹಜಾಯೇಲನಿಗೆ ಕಳುಹಿಸಿ
ದನು. ಆದ್ದರಿಂದ ಹಜಾಯೇಲನು ಜೆರುಸಲೇಮಿನ
ವಿರುದ್ಧ ಯುದ್ಧಮಾಡದೆ ಹೊರಟುಹೋದನು.

### ಯೆಹೋವಾಷನ ಮರಣ

[19]"ಯೆಹೂದದ ರಾಜರುಗಳ ಇತಿಹಾಸ" ಎಂಬ
ಪುಸ್ತಕದಲ್ಲಿ ಯೆಹೋವಾಷನು ಮಾಡಿದ ಇತರ ಮಹಾ
ಕಾರ್ಯಗಳ ಬಗ್ಗೆ ಬರೆಯಲಾಗಿದೆ.
[20]ಯೆಹೋವಾಷನ ಅಧಿಕಾರಿಗಳು ಅವನ ವಿರುದ್ಧ
ವಾಗಿ ಸಂಚುಮಾಡಿ ಅವನನ್ನು ಸಿಲ್ಲಾಕ್ಕೆ ಹೋಗುವ
ರಸ್ತೆಯಲ್ಲಿದ್ದ ಮಿಲ್ಲೋ ಮನೆಯಲ್ಲಿ ಕೊಂದುಹಾಕಿದರು.
[21]ಶಿಮೆಯಾತನ ಮಗನಾದ ಯೋಜಾಕಾರನು ಮತ್ತು
ಶೋಮೇರನ ಮಗನಾದ ಯೆಹೋದಾಬಾದನು
ಯೆಹೋವಾಷನ ಅಧಿಕಾರಿಗಳಾಗಿದ್ದರು. ಅವರು
ಯೆಹೋವಾಷನನ್ನು ಕೊಂದರು.

ಜನರು ಯೆಹೋವಾಷನನ್ನು ದಾವೀದನಗರದಲ್ಲಿ
ಅವನ ಪೂರ್ವಿಕರ ಬಳಿ ಸಮಾಧಿ ಮಾಡಿದರು. ಯೆಹೋ
ವಾಷನ ನಂತರ ಅವನ ಮಗನಾದ ಅಮಚ್ಯನು ನೂತನ
ರಾಜನಾದನು.

### ಯೆಹೋವಾಹಾಜನು ತನ್ನ ಆಳ್ವಿಕೆಯನ್ನು ಆರಂಭಿಸಿದನು.

13 ಯೆಹೂದದ ಅರಸನೂ ಅಹಜ್ಯನ ಮಗನೂ ಆದ
ಯೆಹೋವಾಷನ ಆಳ್ವಿಕೆಯ ಇಪ್ಪತ್ತಮೂರ
ನೆಯ ವರ್ಷದಲ್ಲಿ ಯೇಹುವಿನ ಮಗನಾದ ಯೆಹೋ
ವಾಹಾಜನು ಸಮಾರ್ಯದಲ್ಲಿ ಇಸ್ರೇಲಿನ ರಾಜನಾದನು.
ಯೆಹೋವಾಹಾಜನು ಹದಿನೇಳು ವರ್ಷ ಆಳಿದನು.
[2]ಯೆಹೋವನು ತಪ್ಪೆಂದು ಹೇಳಿದ ಕಾರ್ಯಗಳನ್ನು
ಯೆಹೋವಾಹಾಜನು ಮಾಡಿದನು. ಇಸ್ರೇಲರನ್ನು ಪಾಪ
ಮಾಡುವಂತೆ ಪ್ರೇರೇಪಿಸಿದ ನೆಬಾಟನ ಮಗನಾದ
ಯಾರೊಬ್ಬಾಮನ ಪಾಪಗಳನ್ನೂ ಯೆಹೋವಾಹಾಜನು
ಅನುಸರಿಸುತ್ತಲೇ ಹೋದನು. [3]ಆಗ ಯೆಹೋವನು
ಇಸ್ರೇಲಿಗೆ ವಿರುದ್ಧವಾಗಿ ಕೋಪಗೊಂಡು ಅರಾಮ್ಯರ
ರಾಜನಾದ ಹಜಾಯೇಲನ ಮತ್ತು ಅವನ ಮಗನಾದ
ಬೆನ್ಹದದನ ಅಧೀನಕ್ಕೆ ಇಸ್ರೇಲನ್ನು ಒಪ್ಪಿಸಿದನು.

### ಇಸ್ರೇಲಿನ ಮೇಲೆ ಯೆಹೋವನ ಕರುಣೆ

[4]ಆಗ ಯೆಹೋವಾಹಾಜನು ಯೆಹೋವನಿಗೆ ಮೊರೆ
ಯಿಟ್ಟನು. ಯೆಹೋವನು ಅವನ ಮೊರೆಯನ್ನು ಕೇಳಿ,
ಅರಾಮ್ಯರ ರಾಜನಿಂದ ಬಾಧೆಗೆ ಒಳಗಾಗಿದ್ದ [5]ಇಸ್ರೇ
ಲನ್ನು ರಕ್ಷಿಸಲು ಒಬ್ಬನನ್ನು ಯೆಹೋವನು ಕಳುಹಿಸಿ
ದನು. ಇಸ್ರೇಲರು ಅರಾಮ್ಯದಿಂದ ಬಿಡುಗಡೆಗೊಂಡು
ಸ್ವತಂತ್ರರಾದರು. ಇಸ್ರೇಲರು ತಮ್ಮ ಸ್ವಂತ ಮನೆಗಳಿಗೆ
ಹಿಂದಿರುಗಿ ಸುರಕ್ಷಿತವಾಗಿ ವಾಸಿಸಿದರು.
[6]ಆದರೂ ಇಸ್ರೇಲರು ಪಾಪಗಳನ್ನು ಮಾಡುವಂತೆ
ಪ್ರೇರೇಪಿಸಿದ ಯಾರೊಬ್ಬಾಮನ ಕುಟುಂಬದ ಪಾಪ
ಗಳನ್ನು ಮಾಡುವುದನ್ನು ಇಸ್ರೇಲರು ನಿಲ್ಲಿಸಲಿಲ್ಲ.
ಇಸ್ರೇಲರು ಯಾರೊಬ್ಬಮನ ಪಾಪಗಳನ್ನು ಮಾಡುತ್ತಲೇ
ಹೋದರು. ಅವರು ಸಮಾರ್ಯದಲ್ಲಿ ಅಶೇರ ವಿಗ್ರಹ
ಸ್ತಂಭವನ್ನು ನೆಟ್ಟರು.
[7]ಅರಾಮ್ಯರ ರಾಜನು ಯೆಹೋವಾಹಾಜನ ಸೇನೆ
ಯನ್ನು ಸೋಲಿಸಿದನು, ಅರಾಮ್ಯರ ರಾಜನು ಐವತ್ತು
ಮಂದಿ ರಾಹುತರನ್ನು, ಹತ್ತು ರಥಗಳನ್ನು ಮತ್ತು ಹತ್ತು
ಸಾವಿರ ಭೂಸೈನಿಕರನ್ನು ಬಿಟ್ಟು ಉಳಿದವರೆಲ್ಲರನ್ನು
ಸುಗ್ಗಿಯ ಕಾಲದಲ್ಲಿ ಗಾಳಿಗೆ ಹಾರಿಹೋಗುವ ಹೊಟ್ಟಿ
ನಂತೆ ನಾಶಮಾಡಿದನು.
[8]"ಇಸ್ರೇಲಿನ ರಾಜರುಗಳ ಇತಿಹಾಸ" ಎಂಬ ಪುಸ್ತಕ
ದಲ್ಲಿ ಯೆಹೋವಾಹಾಜನು ಮಾಡಿದ ಇತರ ಮಹಾ
ಕಾರ್ಯಗಳನ್ನು ಕುರಿತು ಬರೆಯಲಾಗಿದೆ. [9]ಯೆಹೋ
ವಾಹಾಜನು ತೀರಿಕೊಂಡಾಗ ಅವನನ್ನು ಅವನ ಪೂರ್ವಿ
ಕರ ಬಳಿ ಸಮಾರ್ಯದಲ್ಲಿ ಸಮಾಧಿ ಮಾಡಿದರು.
ಯೆಹೋವಾಹಾಜನ ನಂತರ ಅವನ ಮಗನಾದ
ಯೋವಾಷಾನು ನೂತನ ರಾಜನಾದನು.

### ಇಸ್ರೇಲಿನಲ್ಲಿ ಯೋವಾಷನ ಆಳ್ವಿಕೆ

10ಯೆಹೂದದ ರಾಜನಾಗಿದ್ದ ಯೆಹೋವಾಷನ
ಆಳ್ವಿಕೆಯ ಮೂವತ್ತೇಳನೆಯ ವರ್ಷದಲ್ಲಿ ಯೆಹೋವಾ
ಹಾಜನ ಮಗನಾದ ಯೋವಾಷನು ಸಮಾರ್ಯದಲ್ಲಿ
ಇಸ್ರೇಲಿನ ರಾಜನಾದನು. ಯೋವಾಷನು ಇಸ್ರೇಲನ್ನು
ಹದಿನಾರು ವರ್ಷ ಆಳಿದನು. 11ಯೆಹೋವನು ತಪ್ಪೆಂದು
ಹೇಳಿದ ಕಾರ್ಯಗಳನ್ನು ಇಸ್ರೇಲಿನ ರಾಜನಾದ ಯೋವಾ
ಷನು ಮಾಡಿದನು. ಇಸ್ರೇಲರು ಪಾಪಗಳನ್ನು ಮಾಡು
ವಂತೆ ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊ
ಬ್ಬಾಮನ ಪಾಪಗಳನ್ನು ಮತ್ತೆ ಮಾಡುವುದನ್ನು ಅವನು
ನಿಲ್ಲಿಸಲಿಲ್ಲ. 12ಯೋವಾಷಾನು ಮಾಡಿದ ಮಹಾ
ಕಾರ್ಯಗಳನ್ನು ಮತ್ತು ಯೆಹೂದದ ರಾಜನಾದ
ಅಮಚ್ಯನ ವಿರುದ್ಧವಾಗಿ ಅವನು ಮಾಡಿದ ಯುದ್ಧ
ಗಳನ್ನು, ''ಇಸ್ರೇಲರ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಬರೆಯಲಾಗಿದೆ. 13ಯೋವಾಷಾನು ತೀರಿ
ಕೊಂಡಾಗ ಅವನ ಪೂರ್ವಿಕರ ಬಳಿಯಲ್ಲಿ ಅವನನ್ನು
ಸಮಾಧಿಮಾಡಿದರು. ಅನಂತರ ಯಾರೊಬ್ಬಾಮನು
ಯೋವಾಷಾನ ಸಿಂಹಾಸನದ ಮೇಲೆ ಕುಳಿತುಕೊಂಡು
ನೂತನ ರಾಜನಾದನು. ಯೋವಾಷನನ್ನು ಸಮಾರ್ಯ
ದಲ್ಲಿ ಇಸ್ರೇಲಿನ ರಾಜರುಗಳ ಜೊತೆ ಸಮಾಧಿ
ಮಾಡಿದರು.

### ಯೋವಾಷನು ಎಲೀಷನನ್ನು ಸಂಧಿಸುವನು

14ಎಲೀಷನು ಕಾಯಿಲೆ ಬಿದ್ದನು. ತರುವಾಯ, ಈ
ಕಾಯಿಲೆಯಿಂದ ಎಲೀಷನು ಸತ್ತುಹೋದನು. ಇಸ್ರೇಲಿನ
ರಾಜನಾದ ಯೋವಾಷಾನು ಎಲೀಷನ ಬಳಿಗೆ
ಹೋದನು. ಯೋವಾಷನು ಎಲೀಷನಿಗಾಗಿ ಗೋಳಾಡಿ
ದನು. ಯೋವಾಷನು ''ನನ್ನ ತಂದೆಯೇ, ನನ್ನ
ತಂದೆಯೇ, ದೇವರು ಬಂದು ನಿನ್ನನ್ನು ತೆಗೆದುಕೊಂಡು
ಹೋಗಲು ಇದು ಸಕಾಲವೇ?''* ಎಂದು ಹೇಳಿದನು.
15ಎಲೀಷನು ಯೋವಾಷನಿಗೆ, ''ಒಂದು ಬಿಲ್ಲು ಮತ್ತು
ಕೆಲವು ಬಾಣಗಳನ್ನು ತೆಗೆದುಕೋ'' ಎಂದು ಹೇಳಿದನು.
ಯೋವಾಷನು ಒಂದು ಬಿಲ್ಲು ಮತ್ತು ಕೆಲವು ಬಾಣ
ಗಳನ್ನು ತೆಗೆದುಕೊಂಡನು. 16ಆಗ ಎಲೀಷನು ಇಸ್ರೇಲಿನ
ರಾಜನಿಗೆ, ''ಬಿಲ್ಲಿನ ಮೇಲೆ ನಿನ್ನ ಕೈಯನ್ನು ಇಡು''ಎಂದು
ಹೇಳಿದನು. ಯೋವಾಷನು ತನ್ನ ಕೈಯನ್ನು ಬಿಲ್ಲಿನ
ಮೇಲಿಟ್ಟನು. ನಂತರ ಎಲೀಷನು ತನ್ನ ಕೈಗಳನ್ನು ರಾಜನ
ಕೈಗಳ ಮೇಲಿಟ್ಟನು. 17ಎಲೀಷನು,''ಪೂರ್ವದಿಕ್ಕಿನ ಕಿಟಕಿ
ಯನ್ನು ತೆಗೆ'' ಎಂದು ಹೇಳಿದನು. ಯೋವಾಷನು ಕಿಟಕಿ
ಯನ್ನು ತೆರೆದನು. ಆಗ ಎಲೀಷನು, ''ಹೊಡಿ'' ಎಂದನು.
ಯೋವಾಷನು ಹೊಡೆದನು. ಆಗ ಎಲೀಷನು, ''ಅದು
ಯೆಹೋವನ ವಿಜಯದ ಬಾಣ! ಅರಾಮ್ಯರ ಮೇಲಿನ
ವಿಜಯದ ಬಾಣ! ನೀನು ಅರಾಮ್ಯರನ್ನು ಅಫೇಕದಲ್ಲಿ
ಸೋಲಿಸುವೆ. ನೀನು ಅವರನ್ನು ನಾಶಗೊಳಿಸುವೆ''ಎಂದು
ಹೇಳಿದನು.
18ಎಲೀಷನು, ''ಬಾಣಗಳನ್ನು ತೆಗೆದುಕೊ'' ಎಂದನು.
ಯೋವಾಷನು ಬಾಣಗಳನ್ನು ತೆಗೆದುಕೊಂಡನು. ಆಗ
ಎಲೀಷನು ಇಸ್ರೇಲಿನ ರಾಜನಿಗೆ, ''ನೆಲದ ಮೇಲೆ
ಹೊಡಿ'' ಎಂದನು.
ಯೋವಾಷನು ನೆಲವನ್ನು ಮೂರು ಸಲ ಹೊಡೆದನು.
ನಂತರ ಅವನು ನಿಲ್ಲಿಸಿದನು. 19ದೇವಮನುಷ್ಯನು (ಎಲೀ
ಷನು) ಯೋವಾಷನ ಮೇಲೆ ಕೋಪಗೊಂಡು, ''ನೀನು
ಐದು ಅಥವಾ ಆರು ಸಲ ಹೊಡೆಯಬೇಕಾಗಿತ್ತು! ಆಗ
ನೀನು ಅರಾಮ್ಯರನ್ನು ನಾಶಗೊಳಿಸುವವರೆಗೆ ಸೋಲಿಸಿ
ಬಿಡಬಹುದಾಗಿತ್ತು! ಆದರೆ ಈಗ ನೀನು ಅರಾಮ್ಯರನ್ನು
ಮೂರು ಸಲ ಮಾತ್ರ ಸೋಲಿಸುವೆ!''ಎಂದು ಹೇಳಿದನು.

### ಎಲೀಷನ ಸಮಾಧಿಯಲ್ಲಿ ಸಂಭವಿಸಿದ ಆಶ್ಚರ್ಯಕರವಾದ ಸಂಗತಿ

20ಎಲೀಷನು ತೀರಿಕೊಂಡಾಗ ಜನರು ಅವನನ್ನು
ಸಮಾಧಿಮಾಡಿದರು.
ವಸಂತಮಾಸದ ಒಂದು ದಿನ, ಮೋವಾಬ್ಯ ಸೈನಿಕರ
ಒಂದು ಗುಂಪು ಇಸ್ರೇಲಿಗೆ ಸುಲಿಗೆ ಮಾಡಲು ಬಂದಿತು.
21ಇಸ್ರೇಲರಲ್ಲಿ ಕೆಲವರು ಸತ್ತವನೊಬ್ಬನನ್ನು ಸಮಾಧಿ
ಮಾಡುತ್ತಿರುವಾಗ ಸೈನಿಕರ ಆ ಗುಂಪನ್ನು ನೋಡಿ
ಸತ್ತವನನ್ನು ಎಲೀಷನ ಸಮಾಧಿಯಲ್ಲಿ ಎಸೆದು ಓಡಿ
ಹೋದರು. ಎಲೀಷನ ಮೂಳೆಗಳನ್ನು ಸತ್ತವನು ಸ್ಪರ್ಶಿ
ಸಿದ ತಕ್ಷಣ, ಸತ್ತ ಮನುಷ್ಯನಿಗೆ ಜೀವ ಬಂದು, ಅವನು
ತನ್ನ ಕಾಲುಗಳ ಮೇಲೆ ನಿಂತುಕೊಂಡನು!

### ಯೋವಾಷನು ಅರಾಮ್ಯರಿಂದ ಇಸ್ರೇಲಿನ ನಗರಗಳನ್ನು ಮತ್ತೆ ಗೆದ್ದುಕೊಂಡನು

22ಯೆಹೋವಾಹಾಜನು ಆಳುತ್ತಿದ್ದ ದಿನಗಳಲ್ಲೆಲ್ಲಾ
ಅರಾಮ್ಯರ ರಾಜನಾದ ಹಜಾಯೇಲನು ಇಸ್ರೇಲಿಗೆ
ತೊಂದರೆ ಕೊಡುತ್ತಿದ್ದನು. 23ಆದರೆ ಯೆಹೋವನು
ಇಸ್ರೇಲರಿಗೆ ದಯಾಪರನಾಗಿದ್ದನು. ಯೆಹೋವನು
ಕರುಣೆಯಿಂದ ಇಸ್ರೇಲರಿಗೆ ಅಭಿಮುಖನಾದನು.
ಏಕೆಂದರೆ ಆತನು ಅಬ್ರಹಾಮನೊಂದಿಗೆ ಇಸಾಕ
ನೊಂದಿಗೆ ಮತ್ತು ಯಾಕೋಬನೊಂದಿಗೆ ಒಡಂಬಡಿಕೆ
ಮಾಡಿಕೊಂಡಿದ್ದನು. ಯೆಹೋವನು ಇಸ್ರೇಲರನ್ನು ನಾಶ
ಗೊಳಿಸಲಿಲ್ಲ. ಅವರನ್ನು ಇನ್ನೂ ತಳ್ಳಿಬಿಟ್ಟರಲಿಲ್ಲ.
24ಅರಾಮ್ಯರ ರಾಜನಾದ ಹಜಾಯೇಲನು ಸತ್ತಮೇಲೆ
ಬೆನ್ಹದದನು ನೂತನ ರಾಜನಾದನು. 25ಹಜಾಯೇಲನು

**ದೇವರು … ಸಕಾಲವೇ** ಅಕ್ಷರಶಃ, '' ಇಸ್ರೇಲಿನ ರಥಗಳಿಗೂ ಕುದುರೆ ಗಳಿಗೂ ಇದು ಸಕಾಲವೇ?'' ನೋಡಿ 2 ರಾಜರುಗಳು .

ಸಾಯುವುದಕ್ಕೆ ಮೊದಲು, ಯೋವಾಷನ ತಂದೆಯಾದ
ಯೆಹೋವಾಹಾಜನಿಂದ ಯುದ್ಧದಲ್ಲಿ ಕೆಲವು ನಗರ
ಗಳನ್ನು ಮತ್ತೆ ವಶಪಡಿಸಿಕೊಂಡನು. ಆದರೆ ಈಗ
ಯೋವಾಷನು ಹಜಾಯೇಲನ ಮಗನಾದ ಬೆನ್ಹದದ
ನಿಂದ ಈ ನಗರಗಳನ್ನು ವಶಪಡಿಸಿಕೊಂಡನು. ಯೋವಾ
ಷಾನು ಬೆನ್ಹದದನನ್ನು ಮೂರು ಸಲ ಸೋಲಿಸಿ ಇಸ್ರೇಲಿನ
ನಗರಗಳನ್ನು ವಶಪಡಿಸಿಕೊಂಡನು.

## ಅಮಚ್ಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸುವನು

14 ಯೆಹೋವಾಹಾಜನ ಮಗನಾದಯೋವಾಷನು
ಇಸ್ರೇಲಿನ ರಾಜನಾಗಿದ್ದ ಎರಡನೆಯ ವರ್ಷದಲ್ಲಿ
ಯೆಹೋವಾಷನ ಮಗ ಅಮಚ್ಯನು ಯೆಹೂದದ ರಾಜ
ನಾದನು. 2ಅಮಚ್ಯನು ಆಳಲಾರಂಭಿಸಿದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಅಮಚ್ಯನು ಜೆರುಸ
ಲೇಮಿನಲ್ಲಿ ಇಪ್ಪತ್ತೊಂಭತ್ತು ವರ್ಷ ಆಳಿದನು. ಜೆರುಸ
ಲೇಮಿನ ಯೆಹೋವದ್ದೀನಳು ಅಮಚ್ಯನ ತಾಯಿ.
3ಯೆಹೋವನು ಸರಿಯೆಂದು ಹೇಳಿದ ಕಾರ್ಯಗಳನ್ನು
ಅಮಚ್ಯನು ಮಾಡಿದನು. ಆದರೆ ಅವನು ತನ್ನ ಪೂರ್ವಿ
ಕನಾದ ದಾವೀದನು ಅನುಸರಿಸಿದಂತೆ ಸಂಪೂರ್ಣವಾಗಿ
ಯೆಹೋವನನ್ನು ಅನುಸರಿಸಲಿಲ್ಲ. ಅಮಚ್ಯನು ತನ್ನ
ತಂದೆಯಾದ ಯೆಹೋವಾಷನು ಮಾಡಿದ ಕಾರ್ಯ
ಗಳನ್ನೆಲ್ಲ ಮಾಡಿದನು.

4ಆದರೆ ಅವನು ಉನ್ನತ ಪೂಜಾ ಸ್ಥಳಗಳನ್ನು ನಾಶ
ಗೊಳಿಸಲಿಲ್ಲ. ಜನರು ಪೂಜಾಸ್ಥಳಗಳಲ್ಲಿ ಇನ್ನೂ ಯಜ್ಞ
ಗಳನ್ನು ಅರ್ಪಿಸುತ್ತಿದ್ದರು ಮತ್ತು ಧೂಪಗಳನ್ನು
ಸುಡುತ್ತಿದ್ದರು.

5ಅಮಚ್ಯನು ರಾಜ್ಯಾಧಿಕಾರವನ್ನು ಬಿಗಿಗೊಳಿಸಿಕೊಂಡ
ಮೇಲೆ, ತನ್ನ ತಂದೆಯನ್ನು ಕೊಂದ ಅಧಿಕಾರಿಗಳನ್ನು
ಕೊಂದುಹಾಕಿದನು. 6ಆದರೆ ಮೋಶೆಯ ಧರ್ಮ
ಶಾಸ್ತ್ರದಲ್ಲಿನ ನಿಯಮಗಳಿಗನುಸಾರವಾಗಿ ಅವನು ಕೊಲೆ
ಗಾರರ ಮಕ್ಕಳನ್ನು ಕೊಂದುಹಾಕಲಿಲ್ಲ. ಮೋಶೆಯ
ಧರ್ಮಶಾಸ್ತ್ರದಲ್ಲಿ ಯೆಹೋವನು, ‘‘ಮಕ್ಕಳು ಮಾಡಿದ
ತಪ್ಪಿಗೆ ತಂದೆತಾಯಿಗಳನ್ನು ಸಾವಿಗೆ ಗುರಿಪಡಿಸಬಾರದು.
ತಂದೆತಾಯಿಗಳು ಮಾಡಿದ ತಪ್ಪಿಗೆ ಅವರ ಮಕ್ಕಳನ್ನು
ಸಾವಿಗೆ ಗುರಿಪಡಿಸಬಾರದು. ಒಬ್ಬ ವ್ಯಕ್ತಿಯನ್ನು ಅವನು
ಮಾಡಿದ ಕೆಟ್ಟ ಕಾರ್ಯಕ್ಕಾಗಿ ಮಾತ್ರ ಸಾವಿಗೆ ಗುರಿ
ಪಡಿಸಬೇಕು’’ ಎಂದು ಆಜ್ಞಾಪಿಸಿದ್ದಾನೆ.

7ಅಮಚ್ಯನು ಉಪ್ಪಿನ ಕಣಿವೆಯಲ್ಲಿ ಹತ್ತು ಸಾವಿರ
ಎದೋಮ್ಯರನ್ನು ಕೊಂದುಹಾಕಿ ಅವರಿಂದ ಸೆಲ ದುರ್ಗ
ವನ್ನು ವಶಪಡಿಸಿಕೊಂಡು ಅದನ್ನು ‘‘ಯೊಕ್ತೆಯೇಲ್’’
ಎಂದು ಕರೆದನು. ಆ ಸ್ಥಳಕ್ಕೆ ಇಂದಿಗೂ ಅದೇ ಹೆಸರಿದೆ.

## ಯೋವಾಷನ ವಿರುದ್ಧ ಯುದ್ಧಮಾಡಲು ಅಮಚ್ಯನ ಅಪೇಕ್ಷೆ

8ಇಸ್ರೇಲರ ರಾಜನೂ ಯೇಹುವಿನ ಮೊಮ್ಮಗನೂ
ಯೆಹೋವಾಹಾಜನ ಮಗನೂ ಆದ ಯೋವಾಷನ ಬಳಿಗೆ
ಅಮಚ್ಯನು ಸಂದೇಶಕರನ್ನು ಕಳುಹಿಸಿದನು. ಅಮಚ್ಯನು
ಸಂದೇಶದಲ್ಲಿ, ‘‘ಬಾ, ನಾವು ಪರಸ್ಪರ ಯುದ್ಧ
ಮಾಡೋಣ!’’ ಎಂದು ಹೇಳಿದ್ದನು.

9ಇಸ್ರೇಲಿನ ರಾಜನಾದ ಯೋವಾಷನು ಯೆಹೂದದ
ರಾಜನಾದ ಅಮಚ್ಯನಿಗೆ,‘‘ಲೆಬನೋನಿನ ಒಂದು ಮುಳ್ಳು
ಗಿಡವು ಲೆಬನೋನಿನ ದೇವದಾರುಮರಕ್ಕೆ ಒಂದು
ಸಂದೇಶವನ್ನು ಕಳುಹಿಸಿತು. ಅದು, ‘ನನ್ನ ಮಗನಿಗೆ ನಿನ್ನ
ಮಗಳನ್ನು ಕೊಟ್ಟು ಮದುವೆ ಮಾಡು’ ಎಂದಿತು. ಆದರೆ
ಲೆಬನೋನಿನ ಒಂದು ಕಾಡುಮೃಗವು ಆ ದಾರಿಯಲ್ಲಿ
ಹೋಗುವಾಗ, ಮುಳ್ಳುಗಿಡದ ಮೇಲೆ ಹಾದು
ಹೋಯಿತು. 10ನೀನು ಎದೋಮ್ಯರನ್ನು ಸೋಲಿಸಿದೆ
ಯೆಂಬುದು ನಿಜ. ಆದರೆ ನೀನು ಎದೋಮ್ಯರ ಮೇಲೆ
ಜಯಗಳಿಸಿದ್ದರಿಂದ ಗರ್ವಿತನಾಗಿರುವೆ. ನೀನು ನಿನ್ನ
ಮನೆಯಲ್ಲೇ ಕುಳಿತು ಬಡಾಯಿಕೊಚ್ಚಿಕೋ. ನಿನಗೆ
ತೊಂದರೆಯನ್ನು ತಂದುಕೊಳ್ಳಬೇಡ. ಇಲ್ಲವಾದರೆ
ನೀನೂ ಬೀಳುವುದಲ್ಲದೆ, ಯೆಹೂದವೂ ನಿನ್ನೊಂದಿಗೆ
ಬಿದ್ದುಹೋಗುವುದು!’’ ಎಂದು ಹೇಳಿದನು.

11ಆದರೆ ಯೋವಾಷನ ಎಚ್ಚರಿಕೆಯನ್ನು ಅಮಚ್ಯನು
ಆಲಿಸಲೇ ಇಲ್ಲ. ಆದ್ದರಿಂದ ಇಸ್ರೇಲಿನ ರಾಜನಾದ
ಯೋವಾಷನು ಯೆಹೂದದ ರಾಜನಾದ ಅಮಚ್ಯನ
ವಿರುದ್ಧ ಹೋರಾಟ ಮಾಡಲು ಯೆಹೂದದ ಬೇತ್ಷೆ
ಮೆಷಿಗೆ ಹೋದನು. 12ಯೆಹೂದ್ಯರನ್ನು ಇಸ್ರೇಲರು
ಸೋಲಿಸಿದರು. ಯೆಹೂದದ ಪ್ರತಿಯೊಬ್ಬರೂ ಮನೆಗೆ
ಓಡಿಹೋದರು. 13ಇಸ್ರೇಲಿನ ರಾಜನಾದ ಯೋವಾಷನು
ಬೇತ್ಷೆಮೆಷಿನಲ್ಲಿ ಯೆಹೂದದ ರಾಜನಾದ ಅಮಚ್ಯನನ್ನು
ಸೆರೆಹಿಡಿದನು. ಅಮಚ್ಯನು ಯೆಹೋವಾಷನ ಮಗನೂ
ಅಹಜ್ಯನ ಮೊಮ್ಮಗನೂ ಆಗಿದ್ದನು. ಯೋವಾಷನು
ಜೆರುಸಲೇಮಿಗೆ ಬಂದು ಎಫ್ರಾಯೀಮ್ ಬಾಗಿಲಿನಿಂದ
ಮೂಲೆಯ ಬಾಗಿಲಿನವರೆಗೆ ಆರುನೂರು ಅಡಿ ಉದ್ದದ
ಗೋಡೆಯನ್ನು ಒಡೆದುಹಾಕಿದನು. 14ನಂತರ ಯೋವಾ
ಷನು ದೇವಾಲಯದಲ್ಲಿದ್ದ ಮತ್ತು ಅರಮನೆಯ ಭಂಡಾ
ರದಲ್ಲಿದ್ದ ಬೆಳ್ಳಿಬಂಗಾರಗಳನ್ನು ಮತ್ತು ಪಾತ್ರೆಗಳನ್ನೆಲ್ಲ
ತೆಗೆದುಕೊಂಡನು. ಇದಲ್ಲದೆ ಯೋವಾಷನು ಜನರನ್ನು
ಸಹ ತನ್ನ ಸೆರೆಯಾಳುಗಳನ್ನಾಗಿ ತೆಗೆದುಕೊಂಡು ಸಮಾ
ರ್ಯಕ್ಕೆ ಹಿಂದಿರುಗಿದನು.

15‘‘ಇಸ್ರೇಲಿನ ರಾಜರುಗಳ ಇತಿಹಾಸ’’ಎಂಬ ಪುಸ್ತಕ
ದಲ್ಲಿ ಯೋವಾಷನು ಮಾಡಿದ ಇತರ ಮಹಾಕಾರ್ಯ
ಗಳನ್ನೂ ಯೆಹೂದದ ರಾಜನಾದ ಅಮಚ್ಯನ ವಿರುದ್ಧ
ಅವನು ಹೇಗೆ ಹೋರಾಡಿದನೆಂಬುದನ್ನೂ ಬರೆಯ

ಲಾಗಿದೆ. [16]ಯೋವಾಷನು ತೀರಿಕೊಂಡಾಗ ಅವನನ್ನು
ಅವನ ಪೂರ್ವಿಕರಾದ ಇಸ್ರೇಲಿನ ರಾಜರೊಡನೆ
ಸಮಾರ್ಯದಲ್ಲಿ ಸಮಾಧಿಮಾಡಿದರು. ಯೋವಾಷನ
ನಂತರ ಅವನ ಮಗನಾದ ಯಾರೊಬ್ಬಮನು ನೂತನ
ರಾಜನಾದನು.

### ಅಮಚ್ಯನ ಸಾವು

[17]ಇಸ್ರೇಲರ ರಾಜನೂ ಯೆಹೋವಾಹಾಜನ ಮಗನೂ
ಆದ ಯೋವಾಷನು ಸತ್ತ ನಂತರ ಹದಿನೈದು ವರ್ಷ
ಯೆಹೂದದ ರಾಜನೂ ಯೆಹೋವಾಷನ ಮಗನೂ ಆದ
ಅಮಚ್ಯನು ಬದುಕಿದ್ದನು. [18]“ ಯೆಹೂದದ ರಾಜರುಗಳ
ಇತಿಹಾಸ” ಎಂಬ ಪುಸ್ತಕದಲ್ಲಿ ಅಮಚ್ಯನು ಮಾಡಿದ ಇತರ
ಮಹಾಕಾರ್ಯಗಳನ್ನೆಲ್ಲ ಬರೆಯಲಾಗಿದೆ. [19]ಜನರು
ಜೆರುಸಲೇಮಿನಲ್ಲಿ ಅಮಚ್ಯನ ವಿರುದ್ಧವಾಗಿ ಒಳಸಂಚು
ಮಾಡಿದರು. ಅಮಚ್ಯನು ಲಾಕೀಷಿಗೆ ಓಡಿಹೋದನು.
ಆದರೆ ಜನರು ಅಮಚ್ಯನ ಹಿಂದೆ ಲಾಕೀಷಿಗೆ ಆಳುಗಳನ್ನು
ಕಳುಹಿಸಿದರು. ಅವರು ಲಾಕೀಷಿನಲ್ಲಿ ಅಮಚ್ಯನನ್ನು
ಕೊಂದುಹಾಕಿದರು. [20]ಅಮಚ್ಯನ ದೇಹವನ್ನು ಜನರು
ಕುದುರೆಗಳ ಮೇಲೆ ತೆಗೆದುಕೊಂಡು ಬಂದರು. ಅಮಚ್ಯ
ನನ್ನು ಜೆರುಸಲೇಮಿನಲ್ಲಿರುವ ದಾವೀದನಗರದಲ್ಲಿ
ಅವನ ಪೂರ್ವಿಕರ ಬಳಿ ಸಮಾಧಿಮಾಡಿದರು.

### ಅಜರ್ಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

[21]ನಂತರ ಯೆಹೂದದ ಜನರೆಲ್ಲರೂ ಅಜರ್ಯನನ್ನು
ನೂತನ ರಾಜನನ್ನಾಗಿ ಮಾಡಿದರು. ಅಜರ್ಯನಿಗೆ ಹದಿ
ನಾರು ವರ್ಷ ವಯಸ್ಸಾಗಿತ್ತು. [22]ರಾಜನಾದ ಅಮಚ್ಯನು
ಸತ್ತಮೇಲೆ ಅವನನ್ನು ಅವನ ಪೂರ್ವಿಕರ ಸ್ಮಶಾನದಲ್ಲಿ
ಸಮಾಧಿಮಾಡಿದರು. ನಂತರ ಅರ್ಜಯನು ಏಲತ್
ಪಟ್ಟಣವನ್ನು ಮತ್ತೆ ನಿರ್ಮಿಸಿ ಅದನ್ನು ಯೆಹೂದ ರಾಜ್ಯಕ್ಕೆ
ಸೇರಿಸಿಕೊಂಡನು.

### ಎರಡನೆಯ ಯಾರೊಬ್ಬಾಮನು ಇಸ್ರೇಲಿನಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

[23]ಯೆಹೂದದ ರಾಜನೂ ಯೆಹೋವಾಷನ ಮಗನೂ
ಆದ ಅಮಚ್ಯನ ಆಳ್ವಿಕೆಯ ಹದಿನೈದನೆಯ ವರ್ಷದಲ್ಲಿ
ಇಸ್ರೇಲರ ರಾಜನೂ ಯೋವಾಷನ ಮಗನೂ ಆದ
ಯಾರೊಬ್ಬಾಮನು ಸಮಾರ್ಯದಲ್ಲಿ ಆಳಲಾರಂಭಿಸಿ
ದನು. ಯಾರೊಬ್ಬಾಮನು ನಲವತ್ತೊಂದು ವರ್ಷ
ಆಳಿದನು. [24]ಯೆಹೋವನು ಕೆಟ್ಟದ್ದೆಂದು ಹೇಳಿದ
ಕಾರ್ಯಗಳನ್ನು ಯಾರೊಬ್ಬಾಮನು ಮಾಡಿದನು.
ಇಸ್ರೇಲರನ್ನು ಪಾಪ ಮಾಡುವಂತೆ ಪ್ರೇರೇಪಿಸಿದ
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಕಾರ್ಯ
ಗಳನ್ನು ಮಾಡುವುದನ್ನು ಯಾರೊಬ್ಬಾಮನು ನಿಲ್ಲಿ
ಸಲಿಲ್ಲ. [25]ಲೆಬೊ ಹಮಾತಿನಿಂದ ಅರಾಬ ಸಮುದ್ರದ
ವರೆಗೆ ಹಬ್ಬಿದ ಇಸ್ರೇಲರ ದೇಶವನ್ನು ಯಾರೊಬ್ಬಾಮನು
ಮತ್ತೆ ವಶಪಡಿಸಿಕೊಂಡನು. ಇಸ್ರೇಲರ ಯೆಹೋವನು
ತನ್ನ ಸೇವಕನೂ ಅಮಿತ್ತೈನ ಮಗನೂ ಗತ್ ಹೇಫೆರಿನ
ಪ್ರವಾದಿಯೂ ಆದ ಯೋನಾ ಎಂಬವನ ಮೂಲಕ
ಮೊದಲೇ ತಿಳಿಸಿದ್ದಂತೆ ಇದು ಸಂಭವಿಸಿತು. [26]ಇಸ್ರೇಲಿನ
ಸ್ವತಂತ್ರರಾದ ಜನರೂ ಗುಲಾಮರೂ ಬಾಧೆಪಡುತ್ತಿರು
ವುದನ್ನು ಯೆಹೋವನು ನೋಡಿದನು. ಇಸ್ರೇಲರಿಗೆ
ಸಹಾಯ ಮಾಡುವವರು ಯಾರೂ ಇರಲಿಲ್ಲ. [27]ಈ
ಲೋಕದಿಂದ ಇಸ್ರೇಲರ ಹೆಸರನ್ನೇ ತಾನು ಅಳಿಸಿ ಹಾಕು
ತ್ತೇನೆಂದು ಯೆಹೋವನು ಹೇಳಿರಲಿಲ್ಲ. ಆದ್ದರಿಂದ
ಇಸ್ರೇಲಿನ ಜನರನ್ನು ರಕ್ಷಿಸಲು ಯೆಹೋವನು ಯೋವಾ
ಷನ ಮಗನಾದ ಯಾರೊಬ್ಬಾಮನನ್ನು ಉಪಯೋಗಿಸಿ
ಕೊಂಡನು.

[28]“ಇಸ್ರೇಲಿನ ರಾಜರುಗಳ ಇತಿಹಾಸ” ಎಂಬ ಪುಸ್ತಕ
ದಲ್ಲಿ ಯಾರೊಬ್ಬಾಮನು ಮಾಡಿದ ಇತರ ಮಹಾ
ಕಾರ್ಯಗಳ ಬಗ್ಗೆ ಬರೆಯಲಾಗಿದೆ. ಯಾರೊಬ್ಬಾಮನು
ಇಸ್ರೇಲಿಗಾಗಿ ದಮಸ್ಕವನ್ನು ಮತ್ತು ಹಮಾತನ್ನು ವಶಪಡಿಸಿ
ಕೊಂಡದ್ದನ್ನು ಇದು ಒಳಗೊಂಡಿದೆ. (ಈ ನಗರಗಳು
ಯೆಹೂದಕ್ಕೆ ಸೇರಿದ್ದವು.) [29]ಯಾರೊಬ್ಬಾಮನು ಸತ್ತ
ಮೇಲೆ ಅವನನ್ನು ಅವನ ಪೂರ್ವಿಕರಾದ ಇಸ್ರೇಲಿನ
ರಾಜರುಗಳ ಸ್ಮಶಾನದಲ್ಲಿ ಸಮಾಧಿಮಾಡಿದರು.
ಯಾರೊಬ್ಬಾಮನ ಮಗನಾದ ಜೆಕರ್ಯನು ಅವನ
ನಂತರ ಹೊಸ ರಾಜನಾದನು.

### ಯೆಹೂದದಲ್ಲಿ ಅಜರ್ಯನ ಆಳ್ವಿಕೆ

15 ಯಾರೊಬ್ಬಾಮನು ಇಸ್ರೇಲಿನ ರಾಜನಾಗಿದ್ದ
ಇಪ್ಪತ್ತೇಳನೆಯ ವರ್ಷದಲ್ಲಿ ಅಮಚ್ಯನ ಮಗ
ನಾದ ಅಜರ್ಯನು ಯೆಹೂದದ ರಾಜನಾದನು.
[2]ಅಜರ್ಯನು ಆಳಲಾರಂಭಿಸಿದಾಗ ಅವನಿಗೆ ಹದಿನಾರು
ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿನಲ್ಲಿ ಐವತ್ತೆ
ರಡು ವರ್ಷ ಆಳಿದನು. ಜೆರುಸಲೇಮಿನ ಯೆಕೊಲ್ಯ ಎಂಬ
ಹೆಸರಿನವಳು ಅಜರ್ಯನ ತಾಯಿ. [3]ಅಜರ್ಯನು ತನ್ನ
ತಂದೆಯಾದ ಅಮಚ್ಯನಂತೆ ಯೆಹೋವನ ದೃಷ್ಟಿಗೆ
ಯೋಗ್ಯವಾದ ಕಾರ್ಯಗಳನ್ನು ಮಾಡಿದನು. ಅಜ
ರ್ಯನು ತನ್ನ ತಂದೆಯಾದ ಅಮಚ್ಯನು ಮಾಡಿದ
ಕಾರ್ಯಗಳನ್ನೇ ಅನುಸರಿಸಿದನು.[4]ಆದರೆ ಅವನು ಉನ್ನತ
ಸ್ಥಳಗಳನ್ನು ನಾಶಗೊಳಿಸಲಿಲ್ಲ. ಈ ಪೂಜಾಸ್ಥಳಗಳಲ್ಲಿ
ಜನರು ಇನ್ನೂ ಯಜ್ಞಗಳನ್ನು ಅರ್ಪಿಸುತ್ತಿದ್ದರು ಮತ್ತು
ಧೂಪವನ್ನು ಸುಡುತ್ತಿದ್ದರು.

[5]ರಾಜನಾದ ಅಜರ್ಯನು ಕುಷ್ಠರೋಗ ಪೀಡಿತ
ನಾಗುವಂತೆ ಯೆಹೋವನು ಮಾಡಿದನು. ಅವನು

ಸಾಯುವವರೆಗೂ ಕುಷ್ಠರೋಗಿಯಾಗಿಯೇ ಇದ್ದನು. ಅಜರ್ಯನು ಪ್ರತ್ಯೇಕವಾದ ಮನೆಯಲ್ಲಿ ವಾಸಿಸುತ್ತಿದ್ದನು. ರಾಜನ ಮಗನಾದ ಯೋತಾಮನು ರಾಜನ ಅರಮನೆಯನ್ನು ನೋಡಿಕೊಳ್ಳುತ್ತಿದ್ದನು ಮತ್ತು ಜನರನ್ನು ಪಾಲಿಸುತ್ತಿದ್ದನು.

6‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ ಅಜರ್ಯನು ಮಾಡಿದ ಇತರ ಮಹಾ ಕಾರ್ಯಗಳನ್ನು ಕುರಿತು ಬರೆಯಲಾಗಿದೆ. 7ಅಜರ್ಯನು ಸತ್ತ ಮೇಲೆ ಅವನನ್ನು ಅವನ ಪೂರ್ವಿಕರ ಬಳಿ, ದಾವೀದ ನಗರದಲ್ಲಿ ಸಮಾಧಿಮಾಡಲಾಯಿತು. ಅಜರ್ಯನ ನಂತರ ಅವನ ಮಗನಾದ ಯೋತಾಮನು ಹೊಸ ರಾಜನಾದನು.

## ಜೆಕರ್ಯನು ಇಸ್ರೇಲನ್ನು ಸ್ವಲ್ಪ ಕಾಲ ಆಳುವನು

8ಯಾರೊಬ್ಬಾಮನ ಮಗನಾದ ಜೆಕರ್ಯನು ಇಸ್ರೇಲಿನ ಸಮಾರ್ಯದಲ್ಲಿ ಆರು ತಿಂಗಳ ಕಾಲ ಆಳಿದನು. ಅದು ಯೆಹೂದದ ರಾಜನಾಗಿದ್ದ ಅಜರ್ಯನ ಆಳ್ವಿಕೆಯ ಮೂವತ್ತೆಂಟನೆಯ ವರ್ಷವಾಗಿತ್ತು. 9ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು ಜೆಕರ್ಯನು ಮಾಡಿದನು. ಅವನ ಪೂರ್ವಿಕರು ಮಾಡಿದಂತೆಯೇ ಅವನೂ ಮಾಡಿದನು. ಇಸ್ರೇಲರನ್ನು ಪಾಪಮಾಡುವಂತೆ ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊಬ್ಬಾಮನು ಮಾಡಿದಂತಹ ಪಾಪ ಕಾರ್ಯಗಳನ್ನು ಅವನು ನಿಲ್ಲಿಸಲಿಲ್ಲ.

10ಯಾಬೇಷನ ಮಗನಾದ ಶಲ್ಲೂಮನು ಜೆಕರ್ಯನ ವಿರುದ್ಧವಾಗಿ ಸಂಚುಗಳನ್ನು ಮಾಡಿದನು. ಶಲ್ಲೂಮನು ಜೆಕರ್ಯನನ್ನು ಜನರ ಮುಂದೆ ಕೊಂದುಹಾಕಿ ಹೊಸ ರಾಜನಾದನು.11‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ ಜೆಕರ್ಯನು ಮಾಡಿದ ಇತರ ಕಾರ್ಯಗಳನ್ನೆಲ್ಲ ಬರೆಯಲಾಗಿದೆ. 12ಹೀಗೆ ಯೆಹೋವನ ವಾಕ್ಯವು ನೆರವೇರಿತು. ಯೇಹುವಿನ ಸಂತತಿಯವರು ನಾಲ್ಕನೆಯ ತಲೆಮಾರಿನವರೆಗೆ ಇಸ್ರೇಲಿನ ರಾಜರಾಗಿರುತ್ತಾರೆ ಎಂದು ಯೆಹೋವನು ಅವನಿಗೆ ಮೊದಲೇ ತಿಳಿಸಿದ್ದನು.

## ಶಲ್ಲೂಮನು ಇಸ್ರೇಲನ್ನು ಸ್ವಲ್ಪ ಕಾಲ ಆಳುವನು

13ಯೆಹೂದದ ರಾಜನಾದ ಉಜ್ಜೀಯನ ಮೂವತ್ತೊಂಭತ್ತನೆಯ ವರ್ಷದ ಆಳ್ವಿಕೆಯಲ್ಲಿ ಯಾಬೇಷನ ಮಗನಾದ ಶಲ್ಲೂಮನು ಇಸ್ರೇಲಿನ ರಾಜನಾದನು. ಶಲ್ಲೂಮನು ಸಮಾರ್ಯದಲ್ಲಿ ಒಂದು ತಿಂಗಳು ಆಳಿದನು.

14ಗಾದಿಯ ಮಗನಾದ ಮೆನಹೇಮನು ತಿರ್ಚದಿಂದ ಸಮಾರ್ಯಕ್ಕೆ ಬಂದನು. ಮೆನಹೇಮನು ಯಾಬೇಷನ ಮಗನಾದ ಶಲ್ಲೂಮನನ್ನು ಕೊಂದುಹಾಕಿದನು. ನಂತರ ಮೆನಹೇಮನು ಅವನ ನಂತರ ಹೊಸ ರಾಜನಾದನು.

15‘‘ಇಸ್ರೇಲಿನ ರಾಜರುಗಳ ಇತಿಹಾಸ’’ಎಂಬ ಪುಸ್ತಕದಲ್ಲಿ ಶಲ್ಲೂಮನು ಮಾಡಿದ ಕಾರ್ಯಗಳನ್ನೂ ಜೆಕರ್ಯನ ವಿರುದ್ಧವಾಗಿ ಅವನು ಯೋಜಿಸಿದ ಉಪಾಯಗಳನ್ನೂ ಬರೆಯಲಾಗಿದೆ.

## ಇಸ್ರೇಲಿನಲ್ಲಿ ಮೆನಹೇಮನ ಆಳ್ವಿಕೆ

16ಶಲ್ಲೂಮನು ಸತ್ತನಂತರ, ಮೆನಹೇಮನು ತಿಪ್ಸಹುವನ್ನು ಮತ್ತು ಅದರ ಸುತ್ತಲಿನ ಪ್ರದೇಶವನ್ನು ಸೋಲಿಸಿದನು. ಜನರು (ನಗರದ ಬಾಗಿಲನ್ನು) ಅವನಿಗೆ ತೆರೆಯಲು ನಿರಾಕರಿಸಿದರು. ಆದ್ದರಿಂದ ಮೆನಹೇಮನು ಅವರನ್ನು ಸೋಲಿಸಿ ಆ ನಗರದಲ್ಲಿದ್ದ ಗರ್ಭಿಣಿ ಸ್ತ್ರೀಯರ ಹೊಟ್ಟೆಗಳನ್ನು ಸೀಳಿಸಿದನು.

17ಅಜರ್ಯನು ಯೆಹೂದದ ರಾಜನಾಗಿದ್ದ ಮೂವತ್ತೊಂಭತ್ತನೆಯ ವರ್ಷದಲ್ಲಿ ಗಾದಿಯ ಮಗನಾದ ಮೆನಹೇಮನು ಇಸ್ರೇಲಿನ ರಾಜನಾದನು. ಮೆನಹೇಮನು ಸಮಾರ್ಯದಲ್ಲಿ ಹತ್ತು ವರ್ಷಗಳ ಕಾಲ ಆಳಿದನು. 18ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು ಮೆನಹೇಮನು ಮಾಡಿದನು. ಇಸ್ರೇಲರನ್ನು ಪಾಪಕ್ಕೆ ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊಬ್ಬಾಮನ ಪಾಪ ಕಾರ್ಯಗಳನ್ನು ಮೆನಹೇಮನು ಮುಂದುವರಿಸಿದನು.

19ಅಶ್ಶೂರ್ ದೇಶದ ರಾಜನಾದ ಪೂಲನು ಇಸ್ರೇಲಿನ ವಿರುದ್ಧ ಯುದ್ಧಕ್ಕೆ ಬಂದನು. ಮೆನಹೇಮನು ಪೂಲನಿಗೆ ಮೂವತ್ನಾಲ್ಕು ಕಿಲೋ. ಗ್ರಾಂ. ಬೆಳ್ಳಿಯನ್ನು ಕೊಟ್ಟನು. ಪೂಲನು ಮೆನಹೇಮನಿಗೆ ಬೆಂಬಲವನ್ನು ನೀಡಲು ಮತ್ತು ಮೆನಹೇಮನ ರಾಜ್ಯವನ್ನು ಬಲಪಡಿಸಲು ಹೀಗೆ ಮಾಡಿದನು: 20ಶ್ರೀಮಂತರು ಮತ್ತು ಅಧಿಕಾರವುಳ್ಳ ಜನರು ತೆರಿಗೆಯನ್ನು ನೀಡುವಂತೆ ಮಾಡಿ, ಮೆನಹೇಮನು ಈ ಹಣವನ್ನು ಸಂಗ್ರಹಿಸಿದನು. ಮೆನಹೇಮನು ಪ್ರತಿಯೊಬ್ಬ ಮನುಷ್ಯನಿಗೂ ಆರುನೂರು ಗ್ರಾಂ ಬೆಳ್ಳಿಯ ತೆರಿಗೆಯನ್ನು ವಿಧಿಸಿದನು. ನಂತರ ಮೆನಹೇಮನು ಅಶ್ಶೂರದ ರಾಜನಿಗೆ ಹಣವನ್ನು ಕೊಟ್ಟನು. ಆದ್ದರಿಂದ ಅಶ್ಶೂರದ ರಾಜನು ಬಿಟ್ಟುಹೋದನು; ಅವನು ಇಸ್ರೇಲಿನಲ್ಲೇ ನೆಲೆಸಲಿಲ್ಲ.

21‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕದಲ್ಲಿ ಮೆನಹೇಮನು ಮಾಡಿದ ಉಳಿದ ಮಹಾಕಾರ್ಯಗಳನ್ನು ಬರೆಯಲಾಗಿದೆ.

22ಮೆನಹೇಮನು ಸತ್ತಮೇಲೆ ಅವನನ್ನು ಅವನ ಪೂರ್ವಿಕರ ಬಳಿ ಸಮಾಧಿಮಾಡಿದರು. ಮೆನಹೇಮನ ನಂತರ ಅವನ ಮಗನಾದ ಪೆಕಹ್ಯನು ಹೊಸ ರಾಜನಾದನು.

### ಇಸ್ರೇಲನ್ನು ಪೆಕಹ್ಯನು ಆಳಿದನು

[23]ಅಜರ್ಯನು ಯೆಹೂದದ ರಾಜನಾಗಿದ್ದ ಐವತ್ತ
ನೆಯ ವರ್ಷದಲ್ಲಿ ಮೆನಹೇಮನ ಮಗನಾದ ಪೆಕಹ್ಯನು
ಸಮಾರ್ಯದಲ್ಲಿ ಇಸ್ರೇಲಿನ ರಾಜನಾದನು. ಪೆಕಹ್ಯನು
ಎರಡು ವರ್ಷ ಆಳಿದನು. [24]ಯೆಹೋವನು ಕೆಟ್ಟದ್ದೆಂದು
ಹೇಳಿದ ಕಾರ್ಯಗಳನ್ನು ಪೆಕಹ್ಯನು ಮಾಡಿದನು. ಇಸ್ರೇಲ
ರನ್ನು ಪಾಪಕಾರ್ಯಗಳಿಗೆ ಪ್ರೇರೇಪಿಸಿದ ನೆಬಾಟನ ಮಗ
ನಾದ ಯಾರೊಬ್ಬಾಮನ ಪಾಪ ಕಾರ್ಯಗಳನ್ನೇ
ಪೆಕಹ್ಯನು ಮುಂದುವರಿಸಿದನು.

[25]ಪೆಕಹ್ಯನ ಸೇನೆಗೆ ರೆಮಲ್ಯನ ಮಗನಾದ ಪೆಕಹನು
ಸೇನಾಧಿಪತಿಯಾಗಿದ್ದನು. ಅವನು ಪೆಕಹ್ಯನನ್ನು ಕೊಂದು
ಹಾಕಿದನು. ಅವನು ಸಮಾರ್ಯದಲ್ಲಿನ ರಾಜನ ಅರಮನೆ
ಯಲ್ಲಿ ಅರ್ಗೋಬ್ ಮತ್ತು ಅರ್ಯೇ ಎಂಬವರೊಡನೆ
ಪೆಕಹ್ಯನನ್ನು ಕೊಂದುಹಾಕಿದನು. ಪೆಕಹ್ಯನನ್ನು ಪೆಕಹನು
ಕೊಂದುಹಾಕಿದಾಗ ಅವನ ಸಂಗಡ ಗಿಲ್ಯಾದಿನ ಐವತ್ತು
ಜನರಿದ್ದರು. ಪೆಕಹ್ಯನ ನಂತರ ಪೆಕಹನು ಹೊಸ
ರಾಜನಾದನು.

[26]"ಇಸ್ರೇಲಿನ ರಾಜರುಗಳ ಇತಿಹಾಸ" ಎಂಬ ಪುಸ್ತಕ
ದಲ್ಲಿ ಪೆಕಹ್ಯನು ಮಾಡಿದ ಇತರ ಮಹಾಕಾರ್ಯಗಳನ್ನು
ಕುರಿತು ಬರೆಯಲಾಗಿದೆ.

### ಇಸ್ರೇಲನ್ನು ಪೆಕಹನು ಆಳುವನು

[27]ಅಜರ್ಯನು ಯೆಹೂದದ ರಾಜನಾಗಿದ್ದ ಐವತ್ತೆರಡ
ನೆಯ ವರ್ಷದಲ್ಲಿ ರೆಮಲ್ಯನ ಮಗನಾದ ಪೆಕಹನು
ಸಮಾರ್ಯದಲ್ಲಿ ಇಸ್ರೇಲನ್ನು ಆಳಲಾರಂಭಿಸಿದನು.
ಪೆಕಹನು ಇಪ್ಪತ್ತು ವರ್ಷ ಆಳಿದನು. [28]ಯೆಹೋವನು
ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನೇ ಪೆಕಹನು ಮಾಡಿ
ದನು. ಇಸ್ರೇಲರನ್ನು ಪಾಪ ಮಾಡುವಂತೆ ಪ್ರೇರೇಪಿಸಿದ
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಕಾರ್ಯ
ಗಳನ್ನು ಪೆಕಹನು ಮುಂದುವರಿಸಿದನು.

[29]ಅಶ್ಶೂರದ ರಾಜನಾದ ತಿಗ್ಲತ್ಪಿಲೆಸರನೆಂಬವನು
ಇಸ್ರೇಲಿನ ವಿರುದ್ಧ ಯುದ್ಧಕ್ಕೆ ಬಂದನು. ಪೆಕಹನು ಇಸ್ರೇ
ಲಿನ ರಾಜನಾಗಿದ್ದ ಸಂದರ್ಭದಲ್ಲಿ ಇದು ಸಂಭವಿಸಿತು.
ತಿಗ್ಲತ್ಪಿಲೆಸರನು ಇಯ್ಯೋನ್, ಅಬೇಲ್ಬೇತ್ಮಾಕಾ,
ಯಾನೋಹ, ಕದೆಷ್, ಹಾಚೋರ್, ಗಿಲ್ಯಾದ್, ಗಲಿ
ಲಾಯ ಮತ್ತು ನಫ್ತಾಲಿಯ ಪ್ರಾಂತ್ಯಗಳನ್ನೆಲ್ಲ ಸ್ವಾಧೀನ
ಪಡಿಸಿಕೊಂಡನು. ತಿಗ್ಲತ್ಪಿಲೆಸರನು ಈ ಸ್ಥಳಗಳಲ್ಲಿದ್ದ
ಜನರನ್ನು ಸೆರೆಯಾಳುಗಳನ್ನಾಗಿಸಿ ಅಶ್ಶೂರಿಗೆ
ಕೊಂಡೊಯ್ದನು.

[30]ಏಲನ ಮಗನಾದ ಹೋಶೇಯನು ರೆಮಲ್ಯನ
ಮಗನಾದ ಪೆಕಹನ ವಿರುದ್ಧ ಸಂಚುಗಳನ್ನು ಮಾಡಿ ಪೆಕಹ
ನನ್ನು ಕೊಂದುಹಾಕಿದನು. ಪೆಕಹನ ನಂತರ ಹೋಶೇ
ಯನು ಹೊಸ ರಾಜನಾದನು. ಉಜ್ಜೀಯನ ಮಗನಾದ
ಯೋತಾಮನು ಯೆಹೂದದ ರಾಜನಾಗಿದ್ದ ಇಪ್ಪತ್ತನೆಯ
ವರ್ಷದಲ್ಲಿ ಹೀಗಾಯಿತು. [31]ಇಸ್ರೇಲಿನ ರಾಜರುಗಳ
ಇತಿಹಾಸ" ಎಂಬ ಪುಸ್ತಕದಲ್ಲಿ ಪೆಕಹನು ಮಾಡಿದ ಇತರ
ಮಹಾಕಾರ್ಯಗಳನ್ನು ಬರೆಯಲಾಗಿದೆ.

### ಯೆಹೂದವನ್ನು ಯೋತಾಮನು ಆಳುವನು

[32]ಉಜ್ಜೀಯನ ಮಗನಾದ ಯೋತಾಮನು ಯೆಹೂ
ದದ ರಾಜನಾದನು. ರೆಮಲ್ಯನ ಮಗನಾದ ಪೆಕಹನು
ಇಸ್ರೇಲಿನ ರಾಜನಾದ ಎರಡನೆಯ ವರ್ಷದಲ್ಲಿ ಹೀಗಾ
ಯಿತು. [33]ಯೋತಾಮನು ರಾಜನಾದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಯೋತಾಮನು ಜೆರುಸ
ಲೇಮಿನಲ್ಲಿ ಹದಿನಾರು ವರ್ಷ ಆಳಿದನು. ಯೋತಾಮನ
ತಾಯಿಯು ಚಾದೋಕನ ಮಗಳಾದ ಯೆರೂಷಾ ಎಂಬ
ಹೆಸರಿನವಳು. [34]ಯೋತಾಮನು ತನ್ನ ತಂದೆಯಾದ
ಉಜ್ಜೀಯನಂತೆ ಯೆಹೋವನು ಯೋಗ್ಯವೆಂದು ಹೇಳಿದ
ಕಾರ್ಯಗಳನ್ನು ಮಾಡಿದನು. [35]ಆದರೆ ಅವನು ಉನ್ನತ
ಸ್ಥಳಗಳನ್ನು ನಾಶಗೊಳಿಸಲಿಲ್ಲ. ಈ ಪೂಜಾ ಸ್ಥಳಗಳಲ್ಲಿ
ಜನರು ಯಜ್ಞಗಳನ್ನು ಅರ್ಪಿಸುತ್ತಿದ್ದರು ಮತ್ತು ಧೂಪ
ವನ್ನು ಸುಡುತ್ತಿದ್ದರು. ಯೋತಾಮನು ಯೆಹೋವನ ಆಲ
ಯಕ್ಕೆ ಮೇಲ್ಬಾಗಿಲನ್ನು ನಿರ್ಮಿಸಿದನು. [36]"ಯೆಹೂದದ
ರಾಜರುಗಳ ಇತಿಹಾಸ" ಎಂಬ ಪುಸ್ತಕದಲ್ಲಿ ಯೋತಾ
ಮನು ಮಾಡಿದ ಇತರ ಮಹಾಕಾರ್ಯಗಳನ್ನು ಬರೆಯ
ಲಾಗಿದೆ. [37]ಆ ಕಾಲದಲ್ಲಿ, ಅರಾಮ್ಯರ ರಾಜನಾದ
ರೆಚೀನನನ್ನು ಮತ್ತು ರೆಮಲ್ಯನ ಮಗನಾದ ಪೆಕಹನನ್ನು
ಯೆಹೂದದ ವಿರುದ್ಧ ಹೋರಾಡಲು ಯೆಹೋವನು
ಕಳುಹಿಸಲಾರಂಭಿಸಿದನು.

[38]ಯೋತಾಮನು ಸತ್ತಮೇಲೆ ಅವನನ್ನು ಅವನ
ಪೂರ್ವಿಕರ ಬಳಿಯಲ್ಲಿ ಸಮಾಧಿಮಾಡಿದರು. ಯೋತಾ
ಮನನ್ನು ಅವನ ಪೂರ್ವಿಕನಾದ ದಾವೀದನ ನಗರದಲ್ಲಿ
ಸಮಾಧಿಮಾಡಿದರು. ಯೋತಾಮನ ನಂತರ ಅವನ
ಮಗನಾದ ಆಹಾಜನು ಹೊಸ ರಾಜನಾದನು.

### ಆಹಾಜನು ಯೆಹೂದದ ರಾಜನಾದನು

16 ರೆಮಲ್ಯನ ಮಗನಾದ ಪೆಕಹನು ಇಸ್ರೇಲಿನ
ರಾಜನಾಗಿದ್ದ ಹದಿನೇಳನೆಯ ವರ್ಷದಲ್ಲಿ
ಯೋತಾಮನ ಮಗನಾದ ಆಹಾಜನು ಯೆಹೂದದ ರಾಜ
ನಾದನು. [2]ಆಹಾಜನು ರಾಜನಾದಾಗ ಅವನಿಗೆ ಇಪ್ಪತ್ತು
ವರ್ಷ ವಯಸ್ಸಾಗಿತ್ತು. ಆಹಾಜನು ಜೆರುಸಲೇಮನ್ನು
ಹದಿನಾರು ವರ್ಷ ಆಳಿದನು. ಯೆಹೋವನ ದೃಷ್ಟಿಯಲ್ಲಿ
ಒಳ್ಳೆಯದಾಗಿದ್ದ ಕಾರ್ಯಗಳನ್ನು ಆಹಾಜನು ಮಾಡ
ಲಿಲ್ಲ. ಅವನ ಪೂರ್ವಿಕನಾದ ದಾವೀದನು ದೇವರಿಗೆ
ವಿಧೇಯನಾಗಿದ್ದನು; ಆದರೆ ಆಹಾಜನು ವಿಧೇಯ
ನಾಗಲಿಲ್ಲ. [3]ಆಹಾಜನು ಇಸ್ರೇಲಿನ ರಾಜರುಗಳಂತೆ

ಜೀವಿಸಿದನು. ಅವನು ತನ್ನ ಮಗನನ್ನೇ ಬೆಂಕಿಯಲ್ಲಿ
ಆಹುತಿಕೊಟ್ಟನು. ಇಸ್ರೇಲರು ದೇಶಕ್ಕೆ ಬಂದ ಕಾಲದಲ್ಲಿ
ಯೆಹೋವನು ಬಲಾತ್ಕಾರದಿಂದ ಓಡಿಸಿದ ಜನಾಂಗಗಳ
ಅಸಹ್ಯಪಾಪಗಳನ್ನು ಅವನು ಅನುಸರಿಸಿದನು. [4]ಅಹಾ
ಜನು ಉನ್ನತಸ್ಥಳಗಳಲ್ಲಿ ಮತ್ತು ಬೆಟ್ಟಗಳ ಮೇಲೆ ಮತ್ತು
ಹಸಿರು ಮರಗಳ ಕೆಳಗೆ ಯಜ್ಞಗಳನ್ನು ಅರ್ಪಿಸಿದನು
ಮತ್ತು ಧೂಪವನ್ನು ಸುಟ್ಟನು.

[5]ಅರಾಮ್ಯರ ರಾಜನಾದ ರೆಚೀನನು ಮತ್ತು ರೆಮಲ್ಯನ
ಮಗನೂ ಇಸ್ರೇಲಿನ ರಾಜನೂ ಆದ ಪೆಕಹನು ಜೆರುಸ
ಲೇಮಿನ ವಿರುದ್ಧ ಯುದ್ಧಕ್ಕೆ ಬಂದರು. ರೆಚೀನ ಮತ್ತು
ಪೆಕಹ ಅಹಾಜನಿಗೆ ಮುತ್ತಿಗೆ ಹಾಕಿದರು. ಆದರೆ ಅವನನ್ನು
ಸೋಲಿಸಲಾಗಲಿಲ್ಲ. [6]ಆ ಸಮಯದಲ್ಲಿ ಅರಾಮ್ಯರ ರಾಜ
ನಾದ ರೆಚೀನನು ಏಲತ್ ಪಟ್ಟಣವನ್ನು ಅರಾಮ್ಯಕ್ಕೆ
ಸೇರಿಸಿಕೊಂಡನು. ರೆಚೀನನು ಏಲತ್ ಪಟ್ಟಣದಲ್ಲಿ
ವಾಸಿಸುತ್ತಿದ್ದ ಯೆಹೂದ್ಯರನ್ನೆಲ್ಲಾ ಓಡಿಸಿದನು. ಅರಾ
ಮ್ಯರು ಬಂದು ಏಲತ್ ಪಟ್ಟಣದಲ್ಲಿ ನೆಲೆಸಿದರು; ಅವರು
ಇಂದಿನವರೆಗೂ ಅಲ್ಲಿಯೇ ವಾಸಿಸುತ್ತಿದ್ದಾರೆ.

[7]ಅಹಾಜನು ಅಶ್ಶೂರದ ರಾಜನಾದ ತಿಗ್ಲತ್ಪಿಲೆಸರನ
ಬಳಿಗೆ ಸಂದೇಶಕರನ್ನು ಕಳುಹಿಸಿದನು. ಆ ಸಂದೇಶವೇ
ನಂದರೆ: ‘‘ನಾನು ನಿನ್ನ ಸೇವಕ. ನಾನು ನಿನಗೆ ಮಗನಂತಿ
ದ್ದೇನೆ. ನೀನು ಬಂದು, ಅರಾಮ್ಯರ ರಾಜನಿಂದ ಮತ್ತು
ಇಸ್ರೇಲಿನ ರಾಜನಿಂದ ನನ್ನನ್ನು ರಕ್ಷಿಸು. ಅವರು ನನ್ನ
ವಿರುದ್ಧ ಯುದ್ಧಕ್ಕೆ ಬಂದಿದ್ದಾರೆ.’’ [8]ಅಹಾಜನು
ಯೆಹೋವನ ಆಲಯದಲ್ಲಿದ್ದ ಮತ್ತು ರಾಜನ ಅರಮನೆ
ಯಲ್ಲಿದ್ದ ಬೆಳ್ಳಿ ಬಂಗಾರಗಳನ್ನು ತೆಗೆದುಕೊಂಡು
ಅಶ್ಶೂರದ ರಾಜನಿಗೆ ಕಾಣಿಕೆಯಾಗಿ ಕಳುಹಿಸಿದನು.
[9]ಅಶ್ಶೂರದ ರಾಜನು ಅಹಾಜನ ಮಾತುಗಳನ್ನು ಕೇಳಿ
ದಮಸ್ಕದ ವಿರುದ್ಧ ಯುದ್ಧಕ್ಕೆ ಹೊರಟು ಆ ನಗರಕ್ಕೆ
ಮುತ್ತಿಗೆ ಹಾಕಿ, ದಮಸ್ಕದ ಜನರನ್ನು ಸೆರೆಹಿಡಿದುಕೊಂಡು
ಕೀರ್‌ಗೆ ಒಯ್ದನು. ಅವನು ರೆಚೀನನನ್ನು ಕೊಂದು
ಹಾಕಿದನು.

[10]ರಾಜನಾದ ಅಹಾಜನು ಅಶ್ಶೂರದ ರಾಜನಾದ
ತಿಗ್ಲತ್ಪಿಲೆಸರನನ್ನು ಭೇಟಿ ಮಾಡಲು ದಮಸ್ಕಕ್ಕೆ
ಹೋದನು. ಅಹಾಜನು ದಮಸ್ಕದಲ್ಲಿದ್ದ ಯಜ್ಞವೇದಿಕೆ
ಯನ್ನು ನೋಡಿದನು. ರಾಜನಾದ ಅಹಾಜನು
ಯಜ್ಞವೇದಿಕೆಯ ವಿನ್ಯಾಸವನ್ನು ಮತ್ತು ಮಾದರಿಯನ್ನು
ಯಾಜಕನಾದ ಊರೀಯನಿಗೆ ಕಳುಹಿಸಿದನು. [11]ಆಗ
ಯಾಜಕನಾದ ಊರೀಯನು, ದಮಸ್ಕದಿಂದ ರಾಜನಾದ
ಅಹಾಜನು ತನಗೆ ಕಳುಹಿಸಿದ ಯಜ್ಞವೇದಿಕೆಯ ಮಾದರಿ
ಯಲ್ಲೇ ಮತ್ತೊಂದು ಯಜ್ಞವೇದಿಕೆಯೊಂದನ್ನು
ನಿರ್ಮಿಸಿದನು. ಹೀಗೆ ರಾಜನಾದ ಅಹಾಜನು ದಮಸ್ಕ
ದಿಂದ ಹಿಂತಿರುಗುವುದಕ್ಕೆ ಮೊದಲೇ ಊರೀಯನು
ಯಜ್ಞವೇದಿಕೆಯೊಂದನ್ನು ನಿರ್ಮಿಸಿದ್ದನು.

[12]ರಾಜನು ದಮಸ್ಕದಿಂದ ಹಿಂದಿರುಗಿಬಂದು ಯಜ್ಞ
ವೇದಿಕೆಯನ್ನು ನೋಡಿದನು. ಅವನು ಯಜ್ಞಗಳನ್ನು
ಅದರ ಮೇಲೆ ಅರ್ಪಿಸಿದನು. [13]ಅಹಾಜನು ಯಜ್ಞವೇದಿ
ಕೆಯ ಮೇಲೆ ಸರ್ವಾಂಗಹೋಮವನ್ನು ಮತ್ತು ಧಾನ್ಯ
ನೈವೇದ್ಯವನ್ನು ಅರ್ಪಿಸಿದನು; ಪಾನನೈವೇದ್ಯವನ್ನು ಸುರಿಸಿ
ದನು; ಸಮಾಧಾನಯಜ್ಞಕ್ಕಾಗಿ ವಧಿಸಿದ ಪಶುಗಳ ರಕ್ತ
ವನ್ನು ಯಜ್ಞವೇದಿಕೆಯ ಮೇಲೆ ಚಿಮಿಕಿಸಿದನು.

[14]ಅಹಾಜನು ದೇವಾಲಯದ ಎದುರಿನಲ್ಲಿ ಯೆಹೋ
ವನ ಸನ್ನಿಧಿಯಲ್ಲಿದ್ದ ತಾಮ್ರದ ಯಜ್ಞವೇದಿಕೆಯನ್ನು
ತೆಗೆಸಿದನು. ಈ ತಾಮ್ರದ ಯಜ್ಞವೇದಿಕೆಯು ಅಹಾಜನ
ಯಜ್ಞವೇದಿಕೆ ಮತ್ತು ದೇವಾಲಯದ ನಡುವೆ ಇದ್ದಿತು.
ಅಹಾಜನು ತಾಮ್ರದ ಯಜ್ಞವೇದಿಕೆಯನ್ನು ತನ್ನ ಸ್ವಂತ
ಯಜ್ಞವೇದಿಕೆಯ ಉತ್ತರದಿಕ್ಕಿನಲ್ಲಿಡಿಸಿದನು. [15]ಅಹಾ
ಜನು ಯಾಜಕನಾದ ಊರೀಯನಿಗೆ, ‘‘ಈ ದೇಶದ ಜನ
ರೆಲ್ಲರೂ ಪ್ರಾತಃಕಾಲದಲ್ಲಿ ಸರ್ವಾಂಗಹೋಮವನ್ನೂ
ಸಾಯಂಕಾಲದಲ್ಲಿ ಧಾನ್ಯನೈವೇದ್ಯವನ್ನೂ ಮತ್ತು ಪಾನ
ದ್ರವ್ಯಗಳನ್ನೂ ಸಮರ್ಪಿಸಲು ಮಹಾವೇದಿಕೆಯನ್ನು ಬಳಸ
ಬೇಕು; ಸರ್ವಾಂಗಹೋಮಕ್ಕಾಗಿ ಮತ್ತು ಸಮಾಧಾನ
ಯಜ್ಞಕ್ಕಾಗಿ ವಧಿಸುವ ಪಶುಗಳ ರಕ್ತವನ್ನು ಈ ಮಹಾ
ವೇದಿಕೆಯ ಮೇಲೆ ಚಿಮುಕಿಸಿ. ಆದರೆ ನಾನು ದೇವರಿಂದ
ದೈವೋತ್ತರಗಳನ್ನು ಕೇಳಲು ತಾಮ್ರವೇದಿಕೆಯನ್ನು ಉಪ
ಯೋಗಿಸುತ್ತೇನೆ’’ ಎಂದು ಹೇಳಿದನು. [16]ರಾಜನಾದ
ಅಹಾಜನು ಆಜ್ಞಾಪಿಸಿದಂತೆಯೇ ಯಾಜಕನಾದ
ಊರೀಯನು ಮಾಡಿದನು.

[17]ನಂತರ ರಾಜನಾದ ಅಹಾಜನು ಪೀಠಗಳ ಪಟ್ಟಿ
ಗಳನ್ನು ಕತ್ತರಿಸಿದನು. ಅವುಗಳ ಮೇಲಿದ್ದ ಗಂಗಾಳಗಳನ್ನು
ತೆಗೆದಿಟ್ಟನು; ಸಮುದ್ರವೆಂಬ ತೊಟ್ಟಿಯನ್ನು ತಾಮ್ರದ
ಹೋರಿಗಳಿಂದ ಕೆಳಗಿಳಿಸಿ ಕಲ್ಲುಕಟ್ಟೆಯ ಮೇಲಿಟ್ಟನು.
[18]ಅಹಾಜನು ಸಬ್ಬತ್ ದಿನಕ್ಕಾಗಿ ಕಟ್ಟಿದ ಮಂಟಪವನ್ನೂ
ಬದಲಾಯಿಸಿದನು. ಕೆಲಸಗಾರರು ಆಲಯದ ಒಳಗೆ
ಇದನ್ನು ನಿರ್ಮಿಸಿದ್ದರು. ಅಹಾಜನು ರಾಜನಿಗಾಗಿ ಇದ್ದ
ಹೊರಭಾಗದ ಬಾಗಿಲನ್ನೂ ಬದಲಾಯಿಸಿದನು. ಅಹಾ
ಜನು ದೇವಾಲಯದಿಂದ ಇವುಗಳನ್ನೆಲ್ಲಾ ಅಶ್ಶೂರದ
ರಾಜನ* ದೆಸೆಯಿಂದ ಬದಲಾಯಿಸಿದನು.

[19]‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ
ಪುಸ್ತಕದಲ್ಲಿ ಅಹಾಜನು ಮಾಡಿದ ಇತರ ಮಹಾಕಾರ್ಯ
ಗಳನ್ನು ಬರೆಯಲಾಗಿದೆ. [20]ಅಹಾಜನು ಸತ್ತಮೇಲೆ ಅವ
ನನ್ನು ಅವನ ಪೂರ್ವಿಕರ ಬಳಿ ದಾವೀದನಗರದಲ್ಲಿ
ಸಮಾಧಿಮಾಡಿದರು. ಅಹಾಜನ ಮಗನಾದ ಹಿಜ್ಕೀ
ಯನು ಅವನ ನಂತರ ಹೊಸ ರಾಜನಾದನು.

---

**ಅಶ್ಶೂರದ ರಾಜ** ಯಾಕೆಂದರೆ ಅಶ್ಶೂರದ ರಾಜನು ಅವುಗಳ ಬಗ್ಗೆ ಕೇಳಿದ್ದರೆ ಅವುಗಳನ್ನು ಸ್ವಾಧೀನಪಡಿಸಿಕೊಳ್ಳುತ್ತಿದ್ದನು.

### ಹೋಶೇಯನು ಇಸ್ರೇಲಿನಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

17 ಏಲನ ಮಗನಾದ ಹೋಶೇಯನು ಸಮಾರ್ಯ
ದಲ್ಲಿ ಇಸ್ರೇಲನ್ನು ಆಳಲಾರಂಭಿಸಿದನು. ಇದು
ಅಹಾಜನು ಯೆಹೂದದ ರಾಜನಾಗಿದ್ದ ಹನ್ನೆರಡನೆಯ
ವರ್ಷದಲ್ಲಾಯಿತು. ಹೋಶೇಯನು ಒಂಭತ್ತು ವರ್ಷ
ಆಳಿದನು.
2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಹೋಶೇಯನು ಮಾಡಿದನು. ಆದರೆ ಹೋಶೇಯನು
ಅವನಿಗಿಂತ ಮೊದಲು ಇಸ್ರೇಲನ್ನು ಆಳಿದ ರಾಜರು
ಗಳಷ್ಟು ಕೆಟ್ಟವನಲ್ಲ.
3ಅಶ್ಶೂರದ ರಾಜನಾದ ಶಲ್ಮನೆಸರನು ಹೋಶೇಯನ
ವಿರುದ್ಧ ಯುದ್ಧಕ್ಕೆ ಬಂದನು. ಶಲ್ಮನೆಸರನು ಹೋಶೇಯ
ನನ್ನು ಸೋಲಿಸಿದನು. ಆದುದರಿಂದ ಹೋಶೇಯನು
ಶಲ್ಮನೆಸರನಿಗೆ ಸೇವಕನಾಗಿ ಕಪ್ಪವನ್ನು ಕೊಟ್ಟನು.
4ಹೋಶೇಯನು ಈಜಿಪ್ಟಿನ ರಾಜನಲ್ಲಿಗೆ ಸಂದೇಶ
ಕರನ್ನು ಕಳುಹಿಸಿದ್ದನು. ಈಜಿಪ್ಟಿನ ರಾಜನಿಗೆ ಸೋ ಎಂಬ
ಹೆಸರಿತ್ತು. ಹೋಶೇಯನು ಅಶ್ಶೂರದ ರಾಜನಿಗೆ ಪ್ರತಿ
ವರ್ಷ ಕಪ್ಪವನ್ನು ಕೊಡುತ್ತಿದ್ದನು, ಆದರೆ ಆ ವರ್ಷ ಕೊಡ
ಲಿಲ್ಲ. ಆದರೆ ಅಶ್ಶೂರದ ರಾಜನಿಗೆ ಹೋಶೇಯನು ತನ್ನ
ವಿರುದ್ಧ ಮಾಡಿರುವ ಒಳಸಂಚು ತಿಳಿದುಬಿಂದಿತು. ಆದ್ದ
ರಿಂದ ಅಶ್ಶೂರದ ರಾಜನು ಹೋಶೇಯನನ್ನು ಬಂಧಿಸಿ,
ಸೆರೆಯಲ್ಲಿಟ್ಟನು.
5ನಂತರ ಅಶ್ಶೂರದ ರಾಜನು ಇಸ್ರೇಲಿನಲ್ಲೆಲ್ಲಾ
ಸಂಚರಿಸಿ ಸಮಾರ್ಯಕ್ಕೆ ಬಂದನು. ಅವನು ಸಮಾರ್ಯ
ವನ್ನು ಮೂರು ವರ್ಷ ಮುತ್ತಿಗೆ ಹಾಕಿದನು. 6ಹೋಶೇ
ಯನು ಇಸ್ರೇಲಿನ ರಾಜನಾಗಿದ್ದ ಒಂಭತ್ತನೆಯ ವರ್ಷ
ದಲ್ಲಿ ಅಶ್ಶೂರದ ರಾಜನು ಸಮಾರ್ಯವನ್ನು ಸ್ವಾಧೀನ
ಪಡಿಸಿಕೊಂಡನು. ಅಶ್ಶೂರದ ರಾಜನು ಇಸ್ರೇಲರನ್ನು ಸೆರೆ
ಯಾಳುಗಳನ್ನಾಗಿ ಒಯ್ದು ಹಲಹು ಪ್ರಾಂತ್ಯದಲ್ಲಿಯೂ
ಹಾಬೋರ್ ಹೊಳೆಯಿರುವ ಗೋಜಾನ್ ಪ್ರಾಂತ್ಯ
ದಲ್ಲಿಯೂ ಮೇದ್ಯರ ನಗರಗಳಲ್ಲಿಯೂ ಇರಿಸಿದನು.
7ಇಸ್ರೇಲರು ತಮ್ಮ ದೇವರಾದ ಯೆಹೋವನ ವಿರುದ್ಧ
ಪಾಪಗಳನ್ನು ಮಾಡಿದ್ದರಿಂದ ಇವೆಲ್ಲವೂ ಸಂಭವಿಸಿದವು.
ಈಜಿಪ್ಟಿನ ರಾಜನಾದ ಫರೋಹನ ಆಳ್ವಿಕೆಯಿಂದ
ಇಸ್ರೇಲರನ್ನು ತಪ್ಪಿಸಿ ಯೆಹೋವನು ಅವರನ್ನು ಈಜಿಪ್ಟ್
ದೇಶದಿಂದ ಹೊರತಂದಿದ್ದನು. ಆದರೆ ಇಸ್ರೇಲರು ಬೇರೆ
ದೇವರುಗಳನ್ನು ಪೂಜಿಸಲು ಆರಂಭಿಸಿ 8ಅನ್ಯರು ಮಾಡು
ವಂತಹ ಕಾರ್ಯಗಳನ್ನೇ ಮಾಡತೊಡಗಿದರು. ಇಸ್ರೇ
ಲರು ಈಜಿಪ್ಟಿನಿಂದ ತಮ್ಮ ದೇಶಕ್ಕೆ ಬಂದಾಗ ಯೆಹೋ
ವನು ಅಲ್ಲಿಯ ನಿವಾಸಿಗಳನ್ನು ಬಲವಂತವಾಗಿ ಹೊರ
ಗಟ್ಟಿದ್ದನು. ಆದರೆ ಇಸ್ರೇಲರು ತಮ್ಮನ್ನು ಆಳುವುದಕ್ಕಾಗಿ
ದೇವರನ್ನು ತೊರೆದು ರಾಜರನ್ನು ಆರಿಸಿಕೊಂಡರು.
9ಇಸ್ರೇಲರು ತಮ್ಮ ದೇವರಾದ ಯೆಹೋವನ ವಿರುದ್ಧ
ರಹಸ್ಯವಾದ ಕೆಟ್ಟಕಾರ್ಯಗಳನ್ನು ಮಾಡಿದರು.
ಇಸ್ರೇಲರು ಚಿಕ್ಕ ಊರಿನಿಂದಿಡಿದು ದೊಡ್ಡ ನಗರ
ದವರೆಗೂ ತಮ್ಮ ಎಲ್ಲಾ ನಗರಗಳಲ್ಲಿ ಉನ್ನತಸ್ಥಳಗಳನ್ನು
ನಿರ್ಮಿಸಿದರು. 10ಇಸ್ರೇಲರು ಪ್ರತಿಯೊಂದು ಬೆಟ್ಟದ
ಮೇಲೂ ಪ್ರತಿಯೊಂದು ಹಸಿರು ಗಿಡಗಳ ಅಡಿಯಲ್ಲೂ
ಸ್ಮಾರಕಕಲ್ಲುಗಳನ್ನು* ಮತ್ತು ಅಶೇರ್ ವಿಗ್ರಹಕಲ್ಲುಗ
ಳನ್ನು ನಿಲ್ಲಿಸಿದರು. 11ಇಸ್ರೇಲರು ಪೂಜಾಸ್ಥಳಗಳಲ್ಲೆಲ್ಲಾ
ಧೂಪವನ್ನು ಸುಡುತ್ತಿದ್ದರು. ಯೆಹೋವನು ಆ ದೇಶ
ದಿಂದ ಬಲವಂತವಾಗಿ ಹೊರಗಟ್ಟಿದ ಆ ಮೊದಲಿನ
ಜನಾಂಗಗಳಂತೆ ಇಸ್ರೇಲರು ಮಾಡಿದರು. ಇಸ್ರೇಲರು
ಮಾಡಿದ ದುಷ್ಟಕಾರ್ಯಗಳಿಂದ ಯೆಹೋವನು ಕೋಪ
ಗೊಂಡನು. 12ಅವರು ವಿಗ್ರಹಗಳ ಸೇವೆಮಾಡಿದರು.
ಯೆಹೋವನು ಇಸ್ರೇಲರಿಗೆ, ‘‘ನೀವು ವಿಗ್ರಹಗಳನ್ನು
ಪೂಜಿಸಲೇಬಾರದು’’ ಎಂದು ಹೇಳಿದ್ದನು.
13ಇಸ್ರೇಲ್ ಮತ್ತು ಯೆಹೂದಗಳನ್ನು ಎಚ್ಚರಿಸಲು
ಯೆಹೋವನು ಪ್ರತಿಯೊಬ್ಬ ಪ್ರವಾದಿಯನ್ನು ಮತ್ತು
ದೇವದರ್ಶಿಯನ್ನು ಬಳಸಿಕೊಂಡನು. ಯೆಹೋವನು,
‘‘ನಿಮ್ಮ ಕೆಟ್ಟಕಾರ್ಯಗಳಿಂದ ದೂರವಾಗಿ! ನನ್ನ ಆಜ್ಞೆ
ಗಳಿಗೆ ಮತ್ತು ಧರ್ಮಶಾಸ್ತ್ರಗಳಿಗೆ ವಿಧೇಯತೆಯಿಂದಿರಿ.
ನಿಮ್ಮ ಪೂರ್ವಿಕರಿಗೆ ನಾನು ನೀಡಿದ ಕಟ್ಟಳೆಗಳನ್ನೆಲ್ಲಾ
ಅನುಸರಿಸಿ. ನಾನು ನನ್ನ ಸೇವಕರಾದ ಪ್ರವಾದಿಗಳ
ಮೂಲಕ ಇವುಗಳನ್ನು ನೀಡಿದ್ದೇನೆ’’ ಎಂದು ಹೇಳಿದ್ದನು.
14ಆದರೆ ಅವರು ಯೆಹೋವನ ಮಾತುಗಳಿಗೆ ಕಿವಿ
ಗೊಡಲಿಲ್ಲ; ತಮ್ಮ ದೇವರಾದ ಯೆಹೋವನನ್ನು ನಂಬದೆ
ಹೋದ ತಮ್ಮ ಪೂರ್ವಿಕರನ್ನೇ ಅನುಸರಿಸಿದರು.
15ಯೆಹೋವನು ಅವರ ಪೂರ್ವಿಕರೊಂದಿಗೆ ಮಾಡಿ
ಕೊಂಡಿದ್ದ ಒಡಂಬಡಿಕೆಯನ್ನು ಮತ್ತು ಆತನ ನಿಯಮ
ಗಳನ್ನು ಅವರು ಒಪ್ಪಲಿಲ್ಲ. ಅವರು ಯೆಹೋವನ ಎಚ್ಚರಿ
ಕೆಗೆ ಗಮನವನ್ನೂ ನೀಡಲಿಲ್ಲ. ಅವರು ನಿರರ್ಥಕವಾದ
ವಿಗ್ರಹಗಳನ್ನು ಅನುಸರಿಸಿ ನಿಷ್ಪ್ರಯೋಜಕರಾದರು,
ಅವರು ತಮ್ಮ ಸುತ್ತಮುತ್ತಲಿನ ಜನಾಂಗಗಳನ್ನು ಅನುಸ
ರಿಸಿದರು. ಯೆಹೋವನು ಇಸ್ರೇಲಿನ ಜನರಿಗೆ ಮಾಡ
ಬಾರದೆಂದು ಎಚ್ಚರಿಸಿ ಹೇಳಿದ್ದನ್ನು ಈ ಜನಾಂಗಗಳು
ಮಾಡಿದವು.
16ಜನರು ತಮ್ಮ ದೇವರಾದ ಯೆಹೋವನ ಆಜ್ಞೆಗಳನ್ನು
ಅನುಸರಿಸುವುದನ್ನು ನಿಲ್ಲಿಸಿದರು. ಅವರು ಚಿನ್ನದ ಎರಡು
ಬಸವನ ಮೂರ್ತಿಗಳನ್ನು ನಿರ್ಮಿಸಿದರು. ಅವರು ಅಶೇರ
ಸ್ತಂಭಗಳನ್ನು ನಿರ್ಮಿಸಿದರು. ಅವರು ಪರಲೋಕದ
ಎಲ್ಲಾ ನಕ್ಷತ್ರಗಳನ್ನು ಮತ್ತು ಬಾಳ್ ದೇವರನ್ನು

---

**ಸ್ಮಾರಕಕಲ್ಲು** ಜನರು ವಿಶೇಷವಾದದ್ದನ್ನು ನೆನಪು ಮಾಡಿಕೊಳ್ಳಲು ನಿಲ್ಲಿಸುತ್ತಿದ್ದ ಕಲ್ಲು, ಪ್ರಾಚೀನ ಇಸ್ರೇಲ್‌ನಲ್ಲಿ ಸುಳ್ಳುದೇವತೆಗಳ ಪೂಜೆಗಾಗಿ ಈ ವಿಶೇಷ ಸ್ಥಳಗಳಲ್ಲಿ ಕಲ್ಲುಗಳನ್ನು ನಿಲ್ಲಿಸುತ್ತಿದ್ದರು.

ಪೂಜಿಸಿದರು. [17]ಅವರು ತಮ್ಮ ಗಂಡುಮಕ್ಕಳನ್ನು ಮತ್ತು
ಹೆಣ್ಣು ಮಕ್ಕಳನ್ನು ಬೆಂಕಿಯಲ್ಲಿ ಆಹುತಿಕೊಟ್ಟರು. ಅವರು
ಭವಿಷ್ಯವನ್ನು ತಿಳಿಯಲು ಮಾಂತ್ರಿಕ ವಿದ್ಯೆಯನ್ನು ಮತ್ತು
ಕಣಿ ಹೇಳುವುದನ್ನು ಕಲಿತರು. ಯೆಹೋವನು ಕೆಟ್ಟ
ದ್ದೆಂದು ಹೇಳಿದ್ದಕ್ಕೆ ತಮ್ಮನ್ನು ತಾವು ಮಾರಿಕೊಂಡು
ಯೆಹೋವನಿಗೆ ಕೋಪವನ್ನು ಉಂಟುಮಾಡಿದರು.
[18]ಆದ್ದರಿಂದ ಯೆಹೋವನು ಇಸ್ರೇಲಿನ ಬಗ್ಗೆ ಉಗ್ರ
ಕೋಪಿಯಾಗಿ, ಅವರನ್ನು ತನ್ನ ದೃಷ್ಟಿಯಿಂದ ದೂರ
ಮಾಡಿದನು. ಯೆಹೂದಕುಲದವರ ಹೊರತಾಗಿ ಇಸ್ರೇ
ಲರಲ್ಲಿ ಯಾರೂ ಉಳಿಯಲಿಲ್ಲ!

### ಯೆಹೂದದ ಜನರೂ ಸಹ ತಪ್ಪಿತಸ್ಥರಾದರು

[19]ಆದರೆ ಯೆಹೂದದ ಜನರೂ ಸಹ ತಮ್ಮ ದೇವರಾದ
ಯೆಹೋವನ ಆಜ್ಞೆಗಳಿಗೆ ವಿಧೇಯರಾಗಿರಲಿಲ್ಲ.
ಯೆಹೂದದ ಜನರು ಇಸ್ರೇಲಿನ ಜನರಂತೆಯೇ ಜೀವಿಸು
ತ್ತಿದ್ದರು. [20]ಯೆಹೋವನು ಇಸ್ರೇಲಿನ ಜನರೆಲ್ಲರನ್ನೂ
ತಿರಸ್ಕರಿಸಿದನು. ಅವನು ಅವರಿಗೆ ಅನೇಕ ತೊಂದರೆಗ
ಳನ್ನು ಉಂಟುಮಾಡಿದನು. ಅವರನ್ನು ನಾಶಗೊಳಿಸಲು
ನಾಶಕರಿಗೆ ಆತನು ಅವಕಾಶ ನೀಡಿದನು. ಕೊನೆಗೆ,
ಆತನು ಅವರನ್ನು ದೂರತಳ್ಳಿ, ತನ್ನ ದೃಷ್ಟಿಯಿಂದ ಅವರನ್ನು
ದೂರ ಮಾಡಿದನು. [21]ಯೆಹೋವನು ಇಸ್ರೇಲನ್ನು
ದಾವೀದನ ವಂಶಾವಳಿಯಿಂದ ಕಿತ್ತುಹಾಕಿದನು. ಇಸ್ರೇ
ಲರು ನೆಬಾಟನ ಮಗನಾದ ಯಾರೊಬ್ಬಾಮನನ್ನು ತಮ್ಮ
ರಾಜ ನನ್ನಾಗಿಸಿ ಕೊಂಡರು. ಯಾರೊಬ್ಬಾಮನು ಇಸ್ರೇಲ
ರನ್ನು ಯೆಹೋವನಿಂದ ದೂರಮಾಡಿದನು. ಇಸ್ರೇಲರು
ಮಹಾಪಾಪಗಳನ್ನು ಮಾಡುವಂತೆ ಯಾರೊಬ್ಬಾಮನು
ಪ್ರೇರೇಪಿಸಿದನು. [22]ಆದ್ದರಿಂದ ಇಸ್ರೇಲರು ಯಾರೊಬ್ಬಾ
ಮನು ಮಾಡಿದ ಪಾಪಗಳನ್ನೆಲ್ಲ ಅನುಸರಿಸಿದರು.
[23]ಯೆಹೋವನು ಇಸ್ರೇಲನ್ನು ತನ್ನ ದೃಷ್ಟಿಯಿಂದ ದೂರ
ತಳ್ಳುವವರೆಗೆ, ಅವರು ಈ ಪಾಪಗಳನ್ನು ಮಾಡುವುದನ್ನು
ನಿಲ್ಲಿಸಲೇ ಇಲ್ಲ. ಇದು ಸಂಭವಿಸುತ್ತದೆಂದು ಯೆಹೋ
ವನು ಹೇಳಿದ್ದನು! ಆತನು ಜನರಿಗೆ ಇದನ್ನು ಮುಂಚೆಯೇ
ತಿಳಿಸಲು ತನ್ನ ಪ್ರವಾದಿಗಳನ್ನು ಕಳುಹಿಸಿದ್ದನು. ಆದ್ದ
ರಿಂದಲೇ ಇಸ್ರೇಲರನ್ನು ತಮ್ಮ ದೇಶದಿಂದ ಅಶ್ಶೂರಿಗೆ
ಸೆರೆಹಿಡಿದು ಒಯ್ದರು. ಅವರು ಇಂದಿಗೂ ಅಲ್ಲಿಯೇ
ಇದ್ದಾರೆ.

### ಸಮಾರ್ಯದ ಜನರ ಆರಂಭ ಕಾಲ

[24]ಇಸ್ರೇಲರನ್ನು ಸಮಾರ್ಯದಿಂದ ಅಶ್ಶೂರದ
ರಾಜನು ಒಯ್ದನು. ನಂತರ ಅಶ್ಶೂರದ ರಾಜನು ಬಾಬಿ
ಲೋನ್, ಕೂತಾ, ಅವ್ವಾ, ಹಮಾತ್ ಮತ್ತು ಸೆಫ
ರ್ವಯಿಮ್‌ಗಳಿಂದ ಜನರನ್ನು ಕರೆತಂದು ಇಸ್ರೇಲರ
ಬದಲಾಗಿ ಅವರನ್ನು ಸಮಾರ್ಯದಲ್ಲಿ ನೆಲೆಗೊಳಿಸಿದನು.
ಅವರು ಸಮಾರ್ಯವನ್ನು ಹೊಂದಿಕೊಂಡು ಅವರ ಸುತ್ತ
ಲಿನ ನಗರಗಳಲ್ಲಿ ವಾಸಿಸಿದರು. [25]ಆದರೆ ಅವರು
ಯೆಹೋವನನ್ನು ಗೌರವಿಸಲಿಲ್ಲ. ಆದ್ದರಿಂದ ಅವರ
ಮೇಲೆ ಆಕ್ರಮಣಮಾಡಲು ಯೆಹೋವನು ಸಿಂಹಗಳನ್ನು
ಕಳುಹಿಸಿದನು. ಈ ಸಿಂಹಗಳು ಆ ಜನರಲ್ಲಿ ಕೆಲವರನ್ನು
ಕೊಂದುಹಾಕಿದವು. [26]ಅಶ್ಶೂರದ ರಾಜನಿಗೆ ಕೆಲವು
ಜನರು, ‘‘ನೀನು ಕೆಲವು ಜನರನ್ನು ಒಯ್ದು ಸಮಾರ್ಯ
ನಗರಗಳಲ್ಲಿ ಇರಿಸಿದೆ. ಅವರು ಆ ದೇಶದ ದೇವರ
ನಿಯಮಗಳ ಬಗ್ಗೆ ತಿಳಿದುಕೊಂಡಿಲ್ಲ. ಆದ್ದರಿಂದ ಅವ
ರನ್ನು ಆಕ್ರಮಣ ಮಾಡಲು ದೇವರು ಸಿಂಹಗಳನ್ನು
ಕಳುಹಿಸಿದನು. ಆ ದೇಶದ ದೇವರ ನಿಯಮಗಳನ್ನು
ಅವರು ತಿಳಿದಿಲ್ಲದಿರುವುದರಿಂದ ಅವರನ್ನು ಸಿಂಹಗಳು
ಕೊಂದುಹಾಕಿದವು’’ ಎಂದು ಹೇಳಿದರು.

[27]ಆದ್ದರಿಂದ ಅಶ್ಶೂರದ ರಾಜನು, ‘‘ನೀವು
ಸಮಾರ್ಯದಿಂದ ಕೆಲವು ಯಾಜಕರನ್ನು ಕರೆದೊಯ್ದಿರು
ವಿರಿ. ನಾನು ಸಮಾರ್ಯದಿಂದ ಸೆರೆಹಿಡಿದು ತಂದಿರುವ
ಯಾಜಕರಲ್ಲೊಬ್ಬನನ್ನು ಅಲ್ಲಿಗೆ ಕಳುಹಿಸಿ. ಆ ಯಾಜಕನು
ಹೋಗಿ ಅಲ್ಲಿಯೇ ನೆಲೆಸಲಿ. ನಂತರ ಆ ಯಾಜಕನು ಆ
ದೇಶದ ದೇವರ ಕಟ್ಟಳೆಗಳನ್ನು ಜನರಿಗೆ ಬೋಧಿಸಲಿ’’
ಎಂದು ಆಜ್ಞಾಪಿಸಿದನು.

[28]ಹೀಗೆ ಅಶ್ಶೂರದವರು ಸಮಾರ್ಯದಿಂದ ಕರೆದೊ
ಯ್ದಿದ್ದ ಯಾಜಕರಲ್ಲೊಬ್ಬನು ಬೇತೇಲಿನಲ್ಲಿ ವಾಸಿಸಲು
ಬಂದನು. ಈ ಯಾಜಕನು ಜನರಿಗೆ, ಯೆಹೋವ
ಭಕ್ತಿಯನ್ನು ಬೋಧಿಸಿದನು.

[29]ಆದರೆ ಅವರೆಲ್ಲರೂ ತಮ್ಮ ಸ್ವಂತ ದೇವರುಗಳನ್ನು
ನಿರ್ಮಿಸಿ, ಅವುಗಳನ್ನು ಸಮಾರ್ಯದವರು ನಿರ್ಮಿಸಿದ್ದ
ಉನ್ನತಸ್ಥಳಗಳಲ್ಲಿನ ಆಲಯಗಳಲ್ಲಿ ಇರಿಸಿದರು. ಅವರು
ಎಲ್ಲೆಲ್ಲಿ ವಾಸಿಸುತ್ತಿದ್ದರೋ ಅಲ್ಲೆಲ್ಲಾ ಹೀಗೆಯೇ ಮಾಡಿ
ದರು. [30]ಬಾಬಿಲೋನಿನ ಜನರು ಸುಳ್ಳುದೇವತೆಯಾದ
ಸುಕ್ಕೋತ್ಬೆನೋತನ್ನು ನಿರ್ಮಿಸಿದರು. ಕೂತದ ಜನರು
ಸುಳ್ಳುದೇವತೆಯಾದ ನೇರ್ಗಲ್‌ಯನ್ನು ಮಾಡಿದರು.
ಹಮಾತಿನ ಜನರು ಸುಳ್ಳುದೇವತೆಯಾದ ಅಷೀಮಾವನ್ನು
ಮಾಡಿದರು. [31]ಅವ್ವೀಯರು ಸುಳ್ಳುದೇವತೆಯಾದ
ನಿಭಜ್ ಮತ್ತು ತರ್ತಕ್‌ಗಳನ್ನು ಮಾಡಿದರು. ಸೆಫರ್ವ
ಯಿಮಿನವರು ತಮ್ಮ ದೇವರುಗಳಾದ ಅದ್ರಮ್ಮೆಲೆಕ್
ಮತ್ತು ಅನ್ನಮ್ಮೆಲೆಕ್‌ಗಳನ್ನು ಗೌರವಿಸಲು ತಮ್ಮ ಮಕ್ಕ
ಳನ್ನು ಬೆಂಕಿಯಲ್ಲಿ ಆಹುತಿಕೊಟ್ಟರು.

[32]ಆದರೆ ಅವರು ಯೆಹೋವನಲ್ಲಿಯೂ ಭಕ್ತಿಯನ್ನಿಟ್ಟಿ
ದ್ದರು. ಅವರು ಉನ್ನತಸ್ಥಳಗಳಿಗೆ ಯಾಜಕರನ್ನು ಜನ
ರಲ್ಲಿಯೇ ಆಯ್ಕೆ ಮಾಡಿಕೊಂಡರು. ಆ ಯಾಜಕರು
ಜನರಿಗಾಗಿ ಉನ್ನತಸ್ಥಳಗಳಲ್ಲಿನ ದೇವಾಲಯಗಳಲ್ಲಿ
ಯಜ್ಞವನ್ನು ಅರ್ಪಿಸಿದರು. [33]ಅವರು ಯೆಹೋವನಲ್ಲಿ
ಭಕ್ತಿಯಿಟ್ಟಿದ್ದರು, ಆದರೆ ತಮ್ಮ ಸ್ವಂತ ದೇವರುಗಳ

ಸೇವೆಯನ್ನೂ ಮಾಡಿದರು. ಅವರು ತಮ್ಮನ್ನು ತೆಗೆದು
ಕೊಂಡು ಬಂದ ದೇಶಗಳಲ್ಲಿ ಮಾಡುತ್ತಿದ್ದಂತೆ ತಮ್ಮ
ದೇವರುಗಳ ಸೇವೆಯನ್ನು ಮಾಡಿದರು.

34ಇಂದಿಗೂ ಸಹ ಅವರು ಪೂರ್ವಕಾಲದಲ್ಲಿ ಮಾಡು
ತ್ತಿದ್ದಂತೆಯೇ ಜೀವಿಸುತ್ತಿದ್ದಾರೆ. ಅವರಿಗೆ ಯೆಹೋವನಲ್ಲಿ
ಭಕ್ತಿಯಿಲ್ಲ. ಅವರು ಇಸ್ರೇಲರ ನಿಯಮಗಳಿಗೆ ಮತ್ತು
ಆಜ್ಞೆಗಳಿಗೆ ವಿಧೇಯರಾಗುವುದಿಲ್ಲ. ಯೆಹೋವನು
ಯಾಕೋಬನ (ಇಸ್ರೇಲ) ಸಂತತಿಗೆ ನೀಡಿದ ನಿಯಮ
ಗಳನ್ನು ಮತ್ತು ಆಜ್ಞೆಗಳನ್ನು ಅನುಸರಿಸುವುದಿಲ್ಲ.
35ಯೆಹೋವನು ಇಸ್ರೇಲಿನ ಜನರೊಂದಿಗೆ ಒಂದು
ಒಡಂಬಡಿಕೆಯನ್ನು ಮಾಡಿಕೊಂಡು ಅವರಿಗೆ, “ನೀವು
ಅನ್ಯದೇವತೆಗಳನ್ನು ಪೂಜಿಸಬಾರದು; ನೀವು ಅವುಗಳಿಗೆ
ಕೈಮುಗಿಯಬಾರದು; ಅವುಗಳ ಸೇವೆಯನ್ನು ಮಾಡ
ಬಾರದು; ಅವುಗಳಿಗೆ ಯಜ್ಞಗಳನ್ನು ಅರ್ಪಿಸಬಾರದು.
36ಆದರೆ ನೀವು ಯೆಹೋವನನ್ನು ಅನುಸರಿಸಲೇಬೇಕು.
ನಿಮ್ಮನ್ನು ಈಜಿಪ್ಟಿನಿಂದ ಹೊರಗೆತಂದ ದೇವರೇ ನಿಮ್ಮ
ಯೆಹೋವ. ಯೆಹೋವನು ನಿಮ್ಮನ್ನು ರಕ್ಷಿಸಲು ತನ್ನ
ಮಹಾಶಕ್ತಿಯನ್ನು ಬಳಸಿದನು. ನೀವು ಯೆಹೋವನನ್ನು
ಆರಾಧಿಸಬೇಕು ಮತ್ತು ಆತನಿಗೆ ಯಜ್ಞಗಳನ್ನು ಅರ್ಪಿಸ
ಬೇಕು. 37ಆತನು ನಿಮಗೆ ಬರೆಯಿಸಿಕೊಟ್ಟ ನಿಯಮ
ಗಳಿಗೆ, ಶಾಸ್ತ್ರಗಳಿಗೆ, ಉಪದೇಶಗಳಿಗೆ ಮತ್ತು ಆಜ್ಞೆಗಳಿಗೆ
ನೀವು ವಿಧೇಯರಾಗಿರಬೇಕು. ನೀವು ಎಲ್ಲಾ ಕಾಲ
ದಲ್ಲೂ ಇವುಗಳಿಗೆ ವಿಧೇಯತೆಯಿಂದಿರಬೇಕು. ನೀವು
ಆನ್ಯದೇವತೆಗಳನ್ನು ಪೂಜಿಸಲೇಬಾರದು. 38ನಾನು
ನಿಮ್ಮೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನು ನೀವು
ಮರೆಯಲೇಬಾರದು. ನೀವು ಅನ್ಯದೇವರುಗಳನ್ನು
ಪೂಜಿಸಬಾರದು. 39ನೀವು ನಿಮ್ಮ ದೇವರಾದ
ಯೆಹೋವನನ್ನು ಮಾತ್ರ ಆರಾಧಿಸಬೇಕು. ಆಗ ಆತನು
ನಿಮ್ಮನ್ನು ನಿಮ್ಮ ಶತ್ರುಗಳಿಂದ ರಕ್ಷಿಸುತ್ತಾನೆ” ಎಂದು
ಆಜ್ಞಾಪಿಸಿದನು.

40ಆದರೆ ಇಸ್ರೇಲರು ಆತನ ಮಾತಿಗೆ ಕಿವಿಗೊಡದೆ ತಮ್ಮ
ಮೊದಲಿನ ಕಾರ್ಯಗಳನ್ನೇ ಮುಂದುವರಿಸಿದರು.
41ಅನ್ಯಜನಾಂಗಗಳು ಯೆಹೋವನಲ್ಲಿ ಭಕ್ತಿಯಿಂದಿ
ದ್ದರೂ ತಮ್ಮ ಸ್ವಂತ ವಿಗ್ರಹಗಳನ್ನು ಪೂಜಿಸುತ್ತಿದ್ದರು.
ಅವರ ಮಕ್ಕಳು ಮತ್ತು ಮೊಮ್ಮಕ್ಕಳು ತಮ್ಮ ಪೂರ್ವಿಕರು
ಮಾಡಿದಂತಹ ಕಾರ್ಯಗಳನ್ನು ಮಾಡುತ್ತಿದ್ದರು. ಅವರು
ಇಂದಿಗೂ ಇಂತಹ ಕಾರ್ಯಗಳನ್ನು ಮಾಡುತ್ತಿದ್ದಾರೆ.

### ಹಿಜ್ಕೀಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು.

18 ಆಹಾಜನ ಮಗನಾದ ಹಿಜ್ಕೀಯನು ಯೆಹೂ
ದದ ರಾಜನಾದನು. ಏಲನ ಮಗನಾದ ಹೋಶೇ
ಯನು ಇಸ್ರೇಲಿನ ರಾಜನಾಗಿದ್ದ ಮೂರನೆಯ ವರ್ಷದಲ್ಲಿ
ಹಿಜ್ಕೀಯನು ಆಳಲಾರಂಭಿಸಿದನು. 2ಹಿಜ್ಕೀಯನು ಆಳ
ಲಾರಂಭಿಸಿದಾಗ ಅವನಿಗೆ ಇಪ್ಪತ್ತೊಂಭತ್ತು ವರ್ಷ ವಯ
ಸ್ಸಾಗಿತ್ತು. ಹಿಜ್ಕೀಯನು ಜೆರುಸಲೇಮಿನಲ್ಲಿ ಇಪ್ಪತ್ತೈದು
ವರ್ಷ ಆಳಿದನು. ಜೆಕರ್ಯನ ಮಗಳಾದ ಅಬೀ ಎಂಬ
ಹೆಸರಿನವಳು ಅವನ ತಾಯಿ.

3ಹಿಜ್ಕೀಯನು ತನ್ನ ಪೂರ್ವಿಕನಾದ ದಾವೀದ
ನಂತೆ, ಯೆಹೋವನು ಯೋಗ್ಯವೆಂದು ಹೇಳಿದ್ದನ್ನು
ಮಾಡಿದನು.

4ಹಿಜ್ಕೀಯನು ಉನ್ನತಸ್ಥಳಗಳನ್ನು ನಾಶಗೊಳಿಸಿದನು.
ಅವನು ಸ್ಮಾರಕಕಲ್ಲುಗಳನ್ನು ಒಡೆದುಹಾಕಿದನು ಮತ್ತು
ಅಶೇರಕಲ್ಲುಗಳನ್ನು ಕತ್ತರಿಸಿಹಾಕಿದನು. ಆ ಸಮಯದಲ್ಲಿ
ಇಸ್ರೇಲರು ಮೋಶೆಯು ಮಾಡಿದ ತಾಮ್ರಸರ್ಪಕ್ಕೆ
ಧೂಪವನ್ನು ಸುಡುತ್ತಿದ್ದರು. ಈ ತಾಮ್ರಸರ್ಪವನ್ನು
‘ನೆಹುಷ್ಟಾನ್’ ಎಂದು ಕರೆಯುತ್ತಿದ್ದರು. ಜನರು ಈ
ಸರ್ಪವನ್ನು ಆರಾಧಿಸುತ್ತಿದ್ದುದರಿಂದ ಹಿಜ್ಕೀಯನು ಈ
ತಾಮ್ರಸರ್ಪವನ್ನು ಒಡೆದು ಚೂರುಚೂರು ಮಾಡಿದನು.
5ಹಿಜ್ಕೀಯನು ಇಸ್ರೇಲಿನ ದೇವರಾದ ಯೆಹೋವನಲ್ಲಿ
ನಂಬಿಕೆಯಿಟ್ಟನು. ಯೆಹೂದದ ರಾಜರುಗಳಲ್ಲೆಲ್ಲಾ
ಹಿಜ್ಕೀಯನಂಥವರು ಅವನ ಮುಂಚೆಯಾಗಲೀ ಅವನ
ನಂತರವಾಗಲೀ ಇರಲಿಲ್ಲ. 6ಹಿಜ್ಕೀಯನು ಯೆಹೋವ
ನಿಗೆ ಬಹಳ ನಂಬಿಕೆಯುಳ್ಳವನಾಗಿದ್ದನು. ಅವನು
ಯೆಹೋವನನ್ನು ಅನುಸರಿಸುವುದನ್ನು ನಿಲ್ಲಿಸಲೇ ಇಲ್ಲ.
ಯೆಹೋವನು ಮೋಶೆಗೆ ನೀಡಿದ ಆಜ್ಞೆಗಳಿಗೆ ಅವನು
ವಿಧೇಯನಾಗಿ ಅನುಸರಿಸಿದನು. 7ಯೆಹೋವನು ಹಿಜ್ಕೀ
ಯನೊಂದಿಗಿದ್ದನು. ಹಿಜ್ಕೀಯನು ತಾನು ಮಾಡಿದ್ದರ
ಲ್ಲೆಲ್ಲಾ ಜಯಗಳಿಸಿದನು.

ಹಿಜ್ಕೀಯನು ಅಶ್ಶೂರದ ರಾಜನೊಂದಿಗಿದ್ದ ಸಂಬಂಧ
ವನ್ನು ಕಡಿದುಹಾಕಿದನು. ಅಶ್ಶೂರದ ರಾಜನ ಸೇವೆ
ಯನ್ನು ಹಿಜ್ಕೀಯನು ನಿಲ್ಲಿಸಿದನು. 8ಹಿಜ್ಕೀಯನು ಗಾಜ
ಪ್ರಾಂತ್ಯದವರೆಗಿದ್ದ ಮತ್ತು ಅದರ ಸುತ್ತಲಿನ ಪ್ರದೇಶ
ದಲ್ಲಿದ್ದ ಫಿಲಿಷ್ಟಿಯರನ್ನು ಸೋಲಿಸಿದನು. ಅವನು
ಫಿಲಿಷ್ಟಿಯರ ಚಿಕ್ಕ ಊರಿನಿಂದಿಡಿದು ದೊಡ್ಡ ನಗರ
ಗಳನ್ನೆಲ್ಲಾ ಸೋಲಿಸಿದನು.

### ಸಮಾರ್ಯಕ್ಕೆ ಅಶ್ಶೂರದವರ ಮುತ್ತಿಗೆ

9ಅಶ್ಶೂರದ ರಾಜನಾದ ಶಲ್ಮನೆಸರನು ಸಮಾರ್ಯದ
ವಿರುದ್ಧ ಹೋರಾಡಲು ಹೋದನು. ಅವನ ಸೈನ್ಯವು ನಗರ
ವನ್ನು ಸುತ್ತುವರಿಯಿತು. ಹಿಜ್ಕೀಯನು ಯೆಹೂದದ
ರಾಜನಾಗಿದ್ದ ನಾಲ್ಕನೆಯ ವರ್ಷದಲ್ಲಿ ಇದು ಸಂಭವಿಸಿತು.
(ಅದು ಏಲನ ಮಗನಾದ ಹೋಶೇಯನು ಇಸ್ರೇಲಿನ
ರಾಜನಾಗಿ ಆಳುತ್ತಿದ್ದ ಏಳನೆಯ ವರ್ಷದಲ್ಲಿ ಸಂಭವಿ
ಸಿತು.) 10ಮೂರು ವರ್ಷಗಳ ಕೊನೆಯಲ್ಲಿ ಶಲ್ಮನೆಸರನು
ಸಮಾರ್ಯವನ್ನು ವಶಪಡಿಸಿಕೊಂಡನು. ಹಿಜ್ಕೀಯನು

ಯೆಹೂದದ ರಾಜನಾಗಿದ್ದ ಆರನೆಯ ವರ್ಷದಲ್ಲಿ ಅವನು
ಸಮಾರ್ಯವನ್ನು ವಶಪಡಿಸಿಕೊಂಡನು. (ಹೋಶೇ
ಯನು ಇಸ್ರೇಲಿನ ರಾಜನಾಗಿ ಆಳುತ್ತಿದ್ದ ಒಂಭತ್ತನೆಯ
ವರ್ಷದಲ್ಲಿ ಇದು ಸಂಭವಿಸಿತು.) [11]ಅಶ್ಶೂರದ ರಾಜನು
ಇಸ್ರೇಲರನ್ನು, ಸೆರೆಯಾಳುಗಳನ್ನಾಗಿ ಅಶ್ಶೂರಿಗೆ
ಒಯ್ದನು. ಅವನು ಅವರನ್ನು ಹಲಹು ಪ್ರಾಂತ್ಯದಲ್ಲಿಯೂ
ಹಾಬೋರ್ ಹೊಳೆಯಿರುವ ಗೋಜಾನ್ ಪ್ರಾಂತ್ಯ
ದಲ್ಲಿಯೂ ಮೇದ್ಯರ ನಗರಗಳಲ್ಲಿಯೂ ವಾಸಿಸುವಂತೆ
ಮಾಡಿದನು. [12]ಇಸ್ರೇಲರು ತಮ್ಮ ದೇವರಾದ ಯೆಹೋ
ವನಿಗೆ ಅವಿಧೇಯರಾದದ್ದೂ ಆತನ ಒಡಂಬಡಿಕೆಯನ್ನು
ಉಲ್ಲಂಘಿಸಿದ್ದೂ ಆತನ ಸೇವಕನಾದ ಮೋಶೆಯ ಆಜ್ಞೆ
ಗಳಿಗೆ ಅವಿಧೇಯರಾದದ್ದೂ ಇದಕ್ಕೆ ಕಾರಣ.

### ಯೆಹೂದವನ್ನು ವಶಪಡಿಸಿಕೊಳ್ಳಲು ಅಶ್ಶೂರದವರು ಸಿದ್ಧರಾದರು

[13]ಹಿಜ್ಕೀಯನು ರಾಜನಾಗಿದ್ದ ಹದಿನಾಲ್ಕನೆಯ ವರ್ಷ
ದಲ್ಲಿ ಅಶ್ಶೂರದ ರಾಜನಾದ ಸನ್ಹೇರೀಬನು. ಯೆಹೂದದ
ಬಲಾಢ್ಯ ನಗರಗಳ ವಿರುದ್ಧವಾಗಿ ಹೋರಾಡಲು
ಹೋದನು. ಸನ್ಹೇರೀಬನು ಆ ನಗರಗಳನ್ನೆಲ್ಲ ಸೋಲಿಸಿ
ದನು. [14]ಆಗ ಯೆಹೂದದ ರಾಜನಾದ ಹಿಜ್ಕೀಯನು
ಲಾಕೀಷಿನಲ್ಲಿದ್ದ ಅಶ್ಶೂರದ ರಾಜನಿಗೆ ಒಂದು ಸಂದೇಶ
ವನ್ನು ಕಳುಹಿಸಿದನು. ಹಿಜ್ಕೀಯನು, ''ನಾನು ತಪ್ಪು ಮಾಡಿ
ದ್ದೇನೆ. ನನ್ನನ್ನು ಒಬ್ಬಂಟಿಗನನ್ನಾಗಿ ಬಿಡು. ನಂತರ ನೀನು
ಅಪೇಕ್ಷಿಸಿದ್ದನ್ನೆಲ್ಲಾ ಕೊಡುತ್ತೇನೆ''ಎಂದು ಹೇಳಿದನು.

ಆಗ ಅಶ್ಶೂರದ ರಾಜನು ಯೆಹೂದದ ರಾಜನಾದ
ಹಿಜ್ಕೀಯನಿಗೆ ಸುಮಾರು ಹನ್ನೊಂದು ಟನ್ನು ಬೆಳ್ಳಿಯನ್ನು
ಮತ್ತು ಒಂದು ಟನ್ನು ಚಿನ್ನವನ್ನು ಕೊಡುವಂತೆ ಹೇಳಿದನು.
[15]ಹಿಜ್ಕೀಯನು ದೇವಾಲಯದಲ್ಲಿದ್ದ ಮತ್ತು ರಾಜನ
ಭಂಡಾರದಲ್ಲಿದ್ದ ಬೆಳ್ಳಿಯನ್ನೆಲ್ಲ ನೀಡಿದನು. [16]ಈ
ಸಮಯದಲ್ಲಿ, ಹಿಜ್ಕೀಯನು ಯೆಹೋವನ ಆಲಯದ
ಬಾಗಿಲುಗಳಿಗೆ ಮತ್ತು ಕದಗಳಿಗೆ ಹೊದಿಸಿದ್ದ ಬಂಗಾರ
ವನ್ನು ಕತ್ತರಿಸಿಹಾಕಿದನು. ರಾಜನಾದ ಹಿಜ್ಕೀಯನು ಈ
ಬಾಗಿಲುಗಳ ಮತ್ತು ಕದಗಳ ಮೇಲೆ ಬಂಗಾರವನ್ನು
ಹೊದಿಸಿದ್ದನು. ಹಿಜ್ಕೀಯನು ಈ ಬಂಗಾರವನ್ನು
ಅಶ್ಶೂರದ ರಾಜನಿಗೆ ನೀಡಿದನು.

### ಅಶ್ಶೂರದ ರಾಜನು ಜೆರುಸಲೇಮಿಗೆ ಜನರನ್ನು ಕಳುಹಿಸಿದನು

[17]ಅಶ್ಶೂರದ ರಾಜ ಜೆರುಸಲೇಮಿನಲ್ಲಿದ್ದ ರಾಜನಾದ
ಹಿಜ್ಕೀಯನ ಬಳಿಗೆ ತನ್ನ ಮೂವರು ಮಹಾಸೇನಾಧಿಪತಿ
ಗಳನ್ನು ಸೈನ್ಯದೊಂದಿಗೆ ಕಳುಹಿಸಿದನು. ಅವರು ಲಾಕೀಷಿ
ನಿಂದ ಜೆರುಸಲೇಮಿಗೆ ಹೋದರು. ಅವರು ಮೇಲಿನ
ಕೆರೆಯ ನೀರಿನ ಕೊಳವೆಯ ಬಳಿ ನಿಂತರು. (ಮೇಲಿನ
ಕೆರೆಯು ರಸ್ತೆಯ ಮೇಲೆ ದೋಭಿಘಾಟ್ ಬಳಿಯಿತ್ತು.)
[18]ಈ ಜನರು ರಾಜನನ್ನು ಕರೆದರು. ಹಿಲ್ಕೀಯನ ಮಗ
ನಾದ ಎಲ್ಯಾಕೀಮ್ (ಎಲ್ಯಾಕೀಮನು ರಾಜ ಗೃಹಾಧಿ
ಪತಿ), ಶೆಬ್ನ (ಕಾರ್ಯದರ್ಶಿ), ಆಸಾಫನ ಮಗನಾದ
ಯೋವನು (ಮಂತ್ರಿ). ಅವರನ್ನು ಭೇಟಿ ಮಾಡಲು
ಹೊರಗೆ ಬಂದರು. [19]ಸೇನಾಧಿಪತಿಗಳಲ್ಲಿ ಒಬ್ಬನಾದ
ರಬ್ಷಾಕೆಯು ಅವರಿಗೆ, ''ಅಶ್ಶೂರದ ಮಹಾರಾಜನು
ಹಿಜ್ಕೀಯನಿಗೆ ತಿಳಿಸುವುದೇನಂದರೆ:

ನಿನ್ನ ನಂಬಿಕೆಗೆ ಆಧಾರವು ಎಲ್ಲಿದೆ? [20]'ಯುದ್ಧ
ದಲ್ಲಿ ನನಗೆ ಸಹಾಯ ಮಾಡಲು ನಿನ್ನಲ್ಲಿ ಬೇಕಾ
ದಷ್ಟು ವಿವೇಕವೂ ಬಲವೂ ಇದೆ' ಎಂದು ನೀನು
ಹೇಳುವೆ. ಆದರೆ ನೀನು ಯಾರನ್ನು ನಂಬಿಕೊಂಡು
ನನಗೆ ವಿರುದ್ಧವಾಗಿ ದಂಗೆ ಎದ್ದಿರುವೆ? [21]ನೀನು
ಮುರಿದುಬಿದ್ದಿರುವ ದಂಟನ್ನು ಊರುಗೋಲೆಂದು
ನಂಬಿ ಭರವಸೆಯಿಟ್ಟಿರುವೆ! ಈಜಿಪ್ಟ್ ಊರು
ಗೋಲಾಗಿದೆ. ಒಬ್ಬ ಮನುಷ್ಯನು ಈ ಊರು
ಗೋಲಿನ ಮೇಲೆ ಭರವಸೆಯಿಟ್ಟರೆ ಅದು ಮುರಿದು
ಬೀಳುತ್ತದೆ ಮತ್ತು ಅವನ ಕೈಯನ್ನೇ ಚುಚ್ಚಿ ಅವನಿಗೆ
ನೋವನ್ನು ಉಂಟುಮಾಡುತ್ತದೆ! ಈಜಿಪ್ಟಿನ
ರಾಜನು ತನ್ನನ್ನು ನಂಬಿದ ಜನರೆಲ್ಲರಿಗೂ ಇದೇ
ರೀತಿಯಲ್ಲಿದ್ದಾನೆ. [22]ಬಹುಶಃ ನೀನು, ''ನೀವು
ನಮ್ಮ ದೇವರಾದ ಯೆಹೋವನಲ್ಲಿ ಭರವಸೆಯಿಟ್ಟಿ
ದ್ದೇವೆ'' ಎಂದು ಹೇಳುವೆ. ಆದರೆ ಹಿಜ್ಕೀಯನು
ಯೆಹೋವನ ಉನ್ನತಸ್ಥಳಗಳನ್ನು ಮತ್ತು ಯಜ್ಞ
ವೇದಿಕೆಯನ್ನು ನಾಶಪಡಿಸಿ ಯೆಹೂದಕ್ಕೆ ಮತ್ತು
ಜೆರುಸಲೇಮಿಗೆ, ''ನೀವು ಜೆರುಸಲೇಮಿನಲ್ಲಿರುವ
ಯಜ್ಞವೇದಿಕೆಯ ಸನ್ನಿಧಿಯಲ್ಲಿ ಮಾತ್ರ ಆರಾಧಿಸ
ಬೇಕು'' ಎಂದು ಹೇಳಿದನೆಂಬುದು ನನಗೆ ತಿಳಿದಿದೆ.

[23]ಈಗ ನಮ್ಮ ಒಡೆಯನಾದ ಅಶ್ಶೂರದ ರಾಜ
ನೊಂದಿಗೆ ಈ ಒಡಂಬಡಿಕೆಯನ್ನು ಮಾಡಿಕೊ.
ನಿನ್ನಲ್ಲಿ ಸವಾರಿಮಾಡಬಲ್ಲ ಸವಾರರು ಇದ್ದರೆ ನಿನಗೆ
ಎರಡು ಸಾವಿರ ಕುದುರೆಗಳನ್ನು ಕೊಡುತ್ತೇನೆಂದು
ನಾನು ಪ್ರಮಾಣ ಮಾಡುತ್ತೇನೆ. [24]ನನ್ನ ಒಡೆಯನ
ಅಧಿಕಾರಿಗಳಲ್ಲಿ ಕನಿಷ್ಠನಾದ ಒಬ್ಬ ಅಧಿಕಾರಿ
ಯನ್ನೂ ನೀನು ಸೋಲಿಸಲಾಗುವುದಿಲ್ಲ! ನಿನಗೆ
ರಥಗಳನ್ನು ಮತ್ತು ಕುದುರೆಯ ಸವಾರರನ್ನು
ಕೊಡಲು ನೀನು ಈಜಿಪ್ಟನ್ನು ಅವಲಂಬಿಸಿರುವೆ.
[25]ನಾನು ಯೆಹೋವನ ಚಿತ್ತವಿಲ್ಲದೆ ಜೆರುಸಲೇ
ಮನ್ನು ನಾಶಗೊಳಿಸಲು ಬಂದೆನೆಂದು ನೆನಸು
ತ್ತೀಯೋ? ''ಈ ದೇಶದ ವಿರುದ್ಧವಾಗಿ ನುಗ್ಗಿ ನಾಶ
ಗೊಳಿಸು'' ಎಂದು ಯೆಹೋವನೇ ನನಗೆ ಆಜ್ಞಾಪಿ
ಸಿದನು ಎಂದು ಹೇಳಿದನು.

26ನಂತರ ಹಿಲ್ಕೀಯನ ಮಗನಾದ ಎಲ್ಯಾಕೀಮ್, ಶೆಬ್ನ
ಮತ್ತು ಯೋವ ಎಂಬುವರು ಸೇನಾಧಿಪತಿಗೆ, ''ದಯ
ವಿಟ್ಟು ನಮ್ಮೊಂದಿಗೆ ಅರಾಮ್ಯರ ಭಾಷೆಯಲ್ಲಿ ಮಾತ
ನಾಡು. ನಾವು ಆ ಭಾಷೆಯನ್ನು ಅರ್ಥಮಾಡಿಕೊಳ್ಳು
ತ್ತೇವೆ. ಗೋಡೆಯ ಮೇಲಿರುವ ಜನರಿಗೆ ನಮ್ಮ
ಮಾತುಗಳು ಕೇಳುವುದರಿಂದ ಯೆಹೂದದ ಭಾಷೆಯಲ್ಲಿ
ನಮ್ಮೊಂದಿಗೆ ಮಾತನಾಡಬೇಡ'' ಎಂದು ಹೇಳಿದರು.
27ಆದರೆ ರಬ್ಷಾಕೆಯು ಅವರಿಗೆ, ''ನನ್ನ ಒಡೆಯನು
ನನ್ನನ್ನು ಕಳುಹಿಸಿದ್ದು ನಾನು ನಿಮ್ಮೊಂದಿಗೆ ಮತ್ತು ನಿಮ್ಮ
ರಾಜನೊಂದಿಗೆ ಮಾತ್ರ ಮಾತಾಡುವುದಕ್ಕಲ್ಲ.
ಗೋಡೆಯ ಮೇಲೆ ಕುಳಿತಿರುವ ಇತರ ಜನರೊಂದಿಗೂ
ನಾನು ಮಾತನಾಡುತ್ತೇನೆ! ಅವರು ನಿಮ್ಮೊಂದಿಗಿದ್ದರೆ
ತಮ್ಮ ಮಲವನ್ನು ತಾವೇ ತಿನ್ನಬೇಕಾಗುತ್ತದೆ ಮತ್ತು ತಮ್ಮ
ಮೂತ್ರವನ್ನು ತಾವೇ ಕುಡಿಯಬೇಕಾಗುತ್ತದೆ!'' ಎಂದು
ಹೇಳಿದನು.
28ನಂತರ ಸೇನಾಧಿಪತಿಯು ಯೂದಾಯ ಭಾಷೆ
ಯಲ್ಲಿ ಗಟ್ಟಿಯಾಗಿ,''ಅಶ್ಶೂರದ ಮಹಾರಾಜನ ಈ
ಸಂದೇಶವನ್ನು ಕೇಳಿರಿ! 29ನಿಮ್ಮನ್ನು ಮೂರ್ಖರನ್ನಾಗಿ
ಸಲು ಹಿಜ್ಕೀಯನಿಗೆ ಅವಕಾಶ ಕೊಡಬೇಡಿ! ನನ್ನ ಶಕ್ತಿ
ಯಿಂದ ಅವನು ನಿಮ್ಮನ್ನು ರಕ್ಷಿಸಲಾಗುವುದಿಲ್ಲ.
30ಯೆಹೋವನನ್ನು ನೀವು ನಂಬುವಂತೆ ಮಾಡಲು
ಹಿಜ್ಕೀಯನಿಗೆ ಅವಕಾಶ ನೀಡಬೇಡಿ! 'ಯೆಹೋವನು
ನಮ್ಮನ್ನು ರಕ್ಷಿಸುತ್ತಾನೆ! ಅಶ್ಶೂರದ ರಾಜನು ಈ ನಗರ
ವನ್ನು ಸೋಲಿಸಲಾಗುವುದಿಲ್ಲ!' ಎಂದು ಹಿಜ್ಕೀಯನು
ಹೇಳುತ್ತಾನೆ.
31ಆದರೆ ಹಿಜ್ಕೀಯನ ಮಾತುಗಳನ್ನು ಕೇಳಬೇಡಿ!''
ಎಂದು ಹೇಳಿದನು.
''ಅಶ್ಶೂರದ ರಾಜ ಹೀಗೆ ಹೇಳುತ್ತಾನೆ: 'ನನ್ನೊಂದಿಗೆ
ಶಾಂತಿಒಪ್ಪಂದ ಮಾಡಿಕೊಂಡು ನನ್ನ ಆಶ್ರಯಕ್ಕೆ ಬನ್ನಿರಿ.
ನಂತರ ಪ್ರತಿಯೊಬ್ಬರೂ ತನ್ನ ಸ್ವಂತ ದಾಕ್ಷಿಯನ್ನು ತಿನ್ನ
ಬಹುದು; ತನ್ನ ಸ್ವಂತ ಅಂಜೂರವನ್ನು ತಿನ್ನಬಹುದು; ತನ್ನ
ಸ್ವಂತ ಬಾವಿಯಿಂದ ನೀರನ್ನು ಕುಡಿಯಬಹುದು.
32ನಾನು ಬಂದು, ನಿಮ್ಮನ್ನು ಈ ದೇಶಕ್ಕೆ ಸಮಾನವಾದ
ಬೇರೊಂದು ದೇಶಕ್ಕೆ ಕರೆದೊಯ್ಯುವವರೆಗೆ ನೀವು ಹೀಗೆ
ಮಾಡಬಹುದು. ಆ ದೇಶವು ಧಾನ್ಯ, ದ್ರಾಕ್ಷಾರಸ,
ಆಹಾರ, ದ್ರಾಕ್ಷಿತೋಟ, ಆಲೀವ್‌ಮರ ಮತ್ತು ಜೇನು
ತುಪ್ಪ ಮುಂತಾದವುಗಳಿಂದ ಸಮೃದ್ಧಿಯಾಗಿದೆ. ನೀವು
ಅಲ್ಲಿ ಸಾಯದೆ ಜೀವಿಸಬಹುದು. ಆದರೆ ಹಿಜ್ಕೀಯನ
ಮಾತುಗಳನ್ನು ಕೇಳಬೇಡಿ! ಅವನು ನಿಮ್ಮ ಮನಸ್ಸನ್ನು
ಬದಲಾಯಿಸಲು ಪ್ರಯತ್ನಿಸುತ್ತಿದ್ದಾನೆ' 'ಯೆಹೋವನು
ನಮ್ಮನ್ನು ರಕ್ಷಿಸುತ್ತಾನೆ' ಎಂದು ಅವನು ಹೇಳುತ್ತಾನೆ.
33ಬೇರೆ ಜನಾಂಗಗಳ ದೇವರುಗಳು ಅವರ ದೇಶಗಳನ್ನು
ಅಶ್ಶೂರದ ರಾಜನಿಗೆ ಸಿಗದಂತೆ ರಕ್ಷಿಸಿದನೇ? ಇಲ್ಲ!
34ಹಮಾತ್ ಮತ್ತು ಅರ್ಪಾದ್ ದೇವರುಗಳು ಎಲ್ಲಿವೆ?
ಸೆಫರ್ವಯಿಮ್, ಹೇನ, ಇವ್ವಾದ ದೇವರುಗಳು ಎಲ್ಲಿವೆ?
ಸಮಾರ್ಯವನ್ನು ನನ್ನ ಕೈಗೆ ಸಿಗದಂತೆ ಅವು ರಕ್ಷಿಸಿದವೇ?
ಇಲ್ಲ!
35ಬೇರೆ ಜನಾಂಗಗಳ ದೇವತೆಗಳು ಯಾವುದಾದರೂ
ತಮ್ಮ ದೇಶವನ್ನು ನನ್ನಿಂದ ರಕ್ಷಿಸುತ್ತವೆಯೇ? ಇಲ್ಲ!
ಜೆರುಸಲೇಮನ್ನು ಯೆಹೋವನು ನನ್ನಿಂದ ರಕ್ಷಿಸು
ತ್ತಾನೆಯೇ ಇಲ್ಲ!''
36ಆದರೆ ಜನರೆಲ್ಲರೂ ಸುಮ್ಮನಿದ್ದರು. ರಾಜನಾದ
ಹಿಜ್ಕೀಯನು ಜನರಿಗೆ ಆಜ್ಞಾಪಿಸಿದ್ದರಿಂದ ಅವರು ಸೇನಾ
ಧಿಪತಿಯೊಂದಿಗೆ ಒಂದು ಮಾತನ್ನೂ ಆಡಲಿಲ್ಲ. ''ಅವನಿಗೆ
ಏನನ್ನೂ ಹೇಳಬೇಡಿ'' ಎಂದು ಹಿಜ್ಕೀಯನು ಹೇಳಿದ್ದನು.
37ಹಿಲ್ಕೀಯನ ಮಗನಾದ ಎಲ್ಯಾಕೀಮ್ (ಎಲ್ಯಾ
ಕೀಮನು ರಾಜಗೃಹಾಧಿಪತಿಯಾಗಿದ್ದನು), ಶೆಬ್ನ
(ಕಾರ್ಯದರ್ಶಿ) ಮತ್ತು ಆಸಾಫನ ಮಗನಾದ ಯೋವ
(ಮಂತ್ರಿ) ಹಿಜ್ಕೀಯನ ಬಳಿಗೆ ಬಂದರು. ಅವರು ದುಃಖ
ದಿಂದ ತಮ್ಮ ಬಟ್ಟೆಗಳನ್ನು ಹರಿದುಕೊಂಡಿದ್ದರು. ಅಶ್ಶೂ
ರದ ಸೇನಾಧಿಪತಿಯಾದ ರಬ್ಷಾಕೆಯು ಹೇಳಿದ ಸಂಗತಿ
ಗಳನ್ನು ಅವರು ಹಿಜ್ಕೀಯನಿಗೆ ತಿಳಿಸಿದರು.

## ಹಿಜ್ಕೀಯನು ತನ್ನ ಅಧಿಕಾರಿಗಳನ್ನು ಪ್ರವಾದಿಯಾದ ಯೆಶಾಯನ ಬಳಿಗೆ ಕಳುಹಿಸಿದನು

19 ರಾಜನಾದ ಹಿಜ್ಕೀಯನು ಅವುಗಳನ್ನೆಲ್ಲ ಕೇಳಿ
ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು
ಗೋಣೀತಟ್ಟನ್ನು ಕಟ್ಟಿಕೊಂಡು ಯೆಹೋವನ ಆಲಯ
ದೊಳಕ್ಕೆ ಹೋದನು.
2ಹಿಜ್ಕೀಯನು ಎಲ್ಯಾಕೀಮನನ್ನು (ರಾಜಗೃಹಾಧಿ
ಪತಿ), ಶೆಬ್ನ (ಕಾರ್ಯದರ್ಶಿ) ಮತ್ತು ಹಿರಿಯರಾದ
ಯಾಜಕರನ್ನು ಆಮೋಚನ ಮಗನೂ ಪ್ರವಾದಿಯೂ
ಆಗಿದ್ದ ಯೆಶಾಯನ ಬಳಿಗೆ ಕಳುಹಿಸಿದನು. ಅವರು ತಮ್ಮ
ದುಃಖವನ್ನೂ ಕಳವಳವನ್ನೂ ತೋರ್ಪಡಿಸುವಂತೆ
ಗೋಣೀತಟ್ಟನ್ನು ಧರಿಸಿದ್ದರು.
3ಅವರು ಯೆಶಾಯನಿಗೆ, ''ಹಿಜ್ಕೀಯನು ಹೇಳುವುದೇ
ನಂದರೆ, ಇಂದು ಮಹಾಕಷ್ಟದ ದಿನವಾಗಿದೆ. ನಾವು ಶಿಕ್ಷೆ
ಯನ್ನೂ ನಿಂದೆಯನ್ನೂ ಅನುಭವಿಸಬೇಕಾಯಿತು. ಇದು
ಪ್ರಸವವೇದನೆಯ ದಿನದಂತಿದೆ. ಆದರೆ ಹೆರಲು ಶಕ್ತಿಯೇ
ಇಲ್ಲವಾಗಿದೆ. 4ಸೇನಾಧಿಪತಿಯ ಒಡೆಯನಾದ ಅಶ್ಶೂರದ
ರಾಜನು, ಜೀವಸ್ವರೂಪನಾದ ದೇವರ ಬಗ್ಗೆ ಕೆಟ್ಟದ್ದನ್ನು
ನುಡಿಯಲು ಅವನನ್ನು ಕಳುಹಿಸಿದನು. ನಿಮ್ಮ ದೇವರಾದ
ಯೆಹೋವನು ಅವುಗಳನ್ನೆಲ್ಲ ಕೇಳಿರುತ್ತಾನೆ. ಯೆಹೋ
ವನು ಶತ್ರುಗಳನ್ನು ತಪ್ಪಿತಸ್ಥರೆಂದು ನಿರ್ಧರಿಸಬಹುದು!
ಆದ್ದರಿಂದ ಇನ್ನೂ ಜೀವಸಹಿತ ಉಳಿದಿರುವ ಜನರಿಗಾಗಿ
ಪ್ರಾರ್ಥಿಸಿ'' ಎಂದು ಹೇಳಿದರು.

5ರಾಜನಾದ ಹಿಜ್ಕೀಯನ ಅಧಿಕಾರಿಗಳು ಯೆಶಾಯನ
ಬಳಿಗೆ ಹೋದರು. 6ಯೆಶಾಯನು ಅವರಿಗೆ, ‘‘ನಿಮ್ಮ
ಒಡೆಯನಾದ ಹಿಜ್ಕೀಯನಿಗೆ ಈ ಸಂದೇಶವನ್ನು ತಿಳಿಸಿ:
‘ಯೆಹೋವನು ಇಂತೆನ್ನುತ್ತಾನೆ: ಅಶ್ಶೂರದ ರಾಜನ
ಅಧಿಕಾರಿಗಳು ನನ್ನನ್ನು ಅಪಹಾಸ್ಯ ಮಾಡಲೆಂದು ಹೇಳಿದ
ಸಂಗತಿಗಳಿಂದ ನೀವು ಹೆದರಬೇಡಿ. 7ನಾನು ಅವನಲ್ಲಿ
ಒಂದು ಆತ್ಮವನ್ನಿರಿಸುತ್ತೇನೆ. ಅವನು ಒಂದು ಸುದ್ದಿಯನ್ನು
ಕೇಳುತ್ತಾನೆ. ನಂತರ ಅವನು ತನ್ನ ಸ್ವಂತ ದೇಶಕ್ಕೆ
ಹಿಂದಿರುಗಿ ಓಡಿಹೋಗುತ್ತಾನೆ. ನಾನು ಅವನನ್ನು ಅವನ
ಸ್ವಂತ ದೇಶದಲ್ಲಿ ಖಡ್ಗದಿಂದ ಕೊಲ್ಲಲ್ಪಡುವಂತೆ ಮಾಡು
ತ್ತೇನೆ’’ಎಂದು ಹೇಳಿದನು.

### ಅಶ್ಶೂರದ ರಾಜ ಹಿಜ್ಕೀಯನನ್ನು ಮತ್ತೆ ಎಚ್ಚರಿಸುವನು

8ಅಶ್ಶೂರದ ರಾಜನು ಲಾಕೀಷನ್ನು ಬಿಟ್ಟು ಹೋದ
ನೆಂಬ ಸುದ್ದಿಯನ್ನು ಸೇನಾಧಿಪತಿಯು ಕೇಳಿ ಲಿಬ್ನಕ್ಕೆ
ಹೋದಾಗ ರಾಜನು ಲಿಬ್ನದ ವಿರುದ್ಧ ಯುದ್ಧ
ಮಾಡುತ್ತಿದ್ದನು. 9ಇಥಿಯೋಪಿಯದ ರಾಜ ತಿರ್ಹಾಕನ
ಬಗ್ಗೆ ಅಶ್ಶೂರದ ರಾಜ ಒಂದು ಗಾಳಿ ಸುದ್ದಿಯನ್ನು
ಕೇಳಿದನು. ‘‘ತಿರ್ಹಾಕನು ನಿನ್ನ ವಿರುದ್ಧ ಹೋರಾಡಲು
ಬಂದಿದ್ದಾನೆ’’ ಎಂಬುದೇ ಆ ಗಾಳಿ ಸುದ್ದಿಯಾಗಿತ್ತು.

ಆದ್ದರಿಂದ ಅಶ್ಶೂರದ ರಾಜನು ಹಿಜ್ಕೀಯನ ಬಳಿಗೆ
ಮತ್ತೆ ಸಂದೇಶಕರನ್ನು ಕಳುಹಿಸಿದನು. ಅಶ್ಶೂರದ
ರಾಜನು ಈ ಸಂದೇಶಕರಿಗೆ ಒಂದು ಸಂದೇಶವನ್ನು
ನೀಡಿದನು.

10ಯೆಹೂದದ ರಾಜನಾದ ಹಿಜ್ಕೀಯನಿಗೆ
ಇದನ್ನು ಹೇಳಿ:
‘‘ನೀನು ನಂಬುವ ದೇವರು ನಿನ್ನನ್ನು ಮೋಸ
ಗೊಳಿಸಲು ಅವಕಾಶ ನೀಡಬೇಡ. ಅಶ್ಶೂರದ ರಾಜ
ಜೆರುಸಲೇಮನ್ನು ಸೋಲಿಸುವುದಿಲ್ಲ ಎಂಬ ನಿನ್ನ
ದೇವರ ಮಾತನ್ನು ನಂಬಬೇಡ. 11ಅಶ್ಶೂರದ
ರಾಜನು ಇತರ ಎಲ್ಲಾ ಜನಾಂಗಗಳಿಗೆ ಮಾಡಿದವು
ಗಳನ್ನು ನೀನು ಕೇಳಿರುವೆ. ನಾವು ಅವರನ್ನು
ಸಂಪೂರ್ಣವಾಗಿ ನಾಶಗೊಳಿಸಿದೆವು! ನೀನು ರಕ್ಷಿಸ
ಲ್ಪಡುವೆಯಾ? ಇಲ್ಲ! 12ಆ ರಾಜ್ಯಗಳ ದೇವರುಗಳು
ತಮ್ಮ ಜನರನ್ನು ರಕ್ಷಿಸಲಾಗ ಲಿಲ್ಲ. ನನ್ನ ಪೂರ್ವಿಕರು
ಅವರನ್ನೆಲ್ಲ ನಾಶಗೊಳಿಸಿದರು. ಅವರು
ಗೋಜಾನ್, ಖಾರಾನ್, ರೆಚೆಫ್ ಮತ್ತು ತೆಲ
ಸ್ಸಾರ್‌ನ ಎದೆನಿನ ಜನರನ್ನು ನಾಶಗೊಳಿಸಿದರು!
13ಹಮಾತಿನ ರಾಜನು ಎಲ್ಲಿದ್ದಾನೆ? ಅರ್ಪಾದ್‌ನ
ರಾಜನೆಲ್ಲಿ? ಸೆಫರ್ವಯಿಮ್ ರಾಜನೆಲ್ಲಿ? ಹೇನ
ಮತ್ತು ಇವ್ವಾಗಳ ರಾಜರೆಲ್ಲಿ? (ಅವರೆಲ್ಲರೂ
ಹತರಾದರು!)’’

### ಹಿಜ್ಕೀಯನು ಯೆಹೋವನಿಗೆ ಪ್ರಾರ್ಥಿಸುವನು

14ಹಿಜ್ಕೀಯನು ಸಂದೇಶಕರಿಂದ ಬಂದ ಪತ್ರಗಳನ್ನು
ತೆಗೆದುಕೊಂಡು ಓದಿದನು. ನಂತರ ಹಿಜ್ಕೀಯನು
ದೇವಾಲಯದವರೆಗೆ ಹೋಗಿ, ಯೆಹೋವನ ಸನ್ನಿಧಿ
ಯಲ್ಲಿ ಆ ಪತ್ರಗಳನ್ನಿರಿಸಿದನು. 15ಹಿಜ್ಕೀಯನು ಯೆಹೋ
ವನ ಸನ್ನಿಧಿಯಲ್ಲಿ, ‘‘ಯೆಹೋವನೇ, ಕೆರೂಬಿಗಳ ಮೇಲೆ
ರಾಜನಾಗಿ ಕುಳಿತುಕೊಳ್ಳುವ ಇಸ್ರೇಲರ ದೇವರೇ,
ಲೋಕದ ರಾಜ್ಯಗಳಿಗೆಲ್ಲಾ ನೀನೊಬ್ಬನೇ ದೇವರಾ
ಗಿರುವೆ. ನೀನು ಪರಲೋಕವನ್ನು ಮತ್ತು ಈ ಲೋಕವನ್ನು
ಸೃಷ್ಟಿಸಿದೆ! 16ಯೆಹೋವನೇ, ದಯವಿಟ್ಟು ನನ್ನ ಮಾತು
ಗಳನ್ನು ಆಲಿಸು! ಯೆಹೋವನೇ, ನಿನ್ನ ಕಣ್ಣುಗಳನ್ನು
ತೆರೆದು, ಈ ಪತ್ರವನ್ನು ನೋಡು. ಸನ್ಹೇರೀಬನು ಜೀವ
ಸ್ವರೂಪನಾದ ದೇವರನ್ನು ನಿಂದಿಸಿ ಕಳುಹಿಸಿರುವ ಈ
ವಾಕ್ಯವನ್ನು ಕೇಳು! 17ಯೆಹೋವನೇ, ಅಶ್ಶೂರದ
ರಾಜರು ಆ ರಾಜ್ಯಗಳನ್ನೆಲ್ಲ ನಾಶಗೊಳಿಸಿದ್ದು ನಿಜ!
18ಅವರು ಆ ದೇಶಗಳ ದೇವರುಗಳನ್ನು ಬೆಂಕಿಯಲ್ಲಿ
ಎಸೆದರು. ಆದರೆ ಅವು ನಿಜವಾದ ದೇವರುಗಳಲ್ಲ. ಅವು
ಗಳು ಮಾನವರಿಂದ ಮರ ಮತ್ತು ಕಲ್ಲುಗಳಿಂದ ನಿರ್ಮಿತ
ವಾಗಿದ್ದವು. ಆದಕಾರಣವೇ ಅಶ್ಶೂರದ ರಾಜರುಗಳು
ಅವುಗಳನ್ನು ನಾಶಗೊಳಿಸಿದರು. 19ನಮ್ಮ ದೇವರಾದ
ಯೆಹೋವನೇ, ಅಶ್ಶೂರದ ರಾಜನಿಂದ ನಮ್ಮನ್ನು
ರಕ್ಷಿಸು. ಭೂಲೋಕದ ರಾಜ್ಯಗಳೆಲ್ಲ ನೀನೊಬ್ಬನೇ ದೇವ
ರಾದ ಯೆಹೋವನೆಂದು ತಿಳಿದುಕೊಳ್ಳುವಂತೆ ನಮ್ಮನ್ನು
ಇವನ ಕೈಯಿಂದ ಬಿಡಿಸು’’ ಎಂದು ಪ್ರಾರ್ಥಿಸಿದನು.

20ಆಮೋಚನ ಮಗನಾದ ಯೆಶಾಯನು ಹಿಜ್ಕೀಯ
ನಿಗೆ ಈ ಸಂದೇಶವನ್ನು ಕಳುಹಿಸಿದನು: ‘‘ಇಸ್ರೇಲಿನ
ದೇವರಾದ ಯೆಹೋವನು ಇಂತೆನ್ನುತ್ತಾನೆ, ‘ಅಶ್ಶೂರದ
ರಾಜನಾದ ಸನ್ಹೇರೀಬನ ವಿರುದ್ಧವಾಗಿ ನೀವು ನನ್ನಲ್ಲಿ
ಪ್ರಾರ್ಥಿಸಿರುವಿರಿ. ನಾನು ನಿಮ್ಮ ಪ್ರಾರ್ಥನೆಯನ್ನು ಕೇಳಿ
ದ್ದೇನೆ.’ 21‘‘ಸನ್ಹೇರೀಬನನ್ನು ಕುರಿತು ಯೆಹೋವನು
ಹೇಳುವುದೇನಂದರೆ:

ಚೀಯೋನ್ (ಜೆರುಸಲೇಮ್ ಕುವರಿಯು
ನಿನ್ನನ್ನು ತಿರಸ್ಕರಿಸುತ್ತಾಳೆ; ನಿನ್ನನ್ನು ಪರಿಹಾಸ್ಯ
ಮಾಡುತ್ತಾಳೆ. ಜೆರುಸಲೇಮಿನ ಕುವರಿಯು ನಿನ್ನ
ಹಿಂದಿನಿಂದ ತಲೆಯಾಡಿಸುತ್ತಾಳೆ.
22 ನೀನು ಯಾರನ್ನು ನಿಂದಿಸಿ ಪರಿಹಾಸ್ಯ ಮಾಡಿದೆ?
ನೀನು ಯಾರ ವಿರುದ್ಧ ಮಾತನಾಡಿದೆ? ನೀನು
ಇಸ್ರೇಲಿನ ಪವಿತ್ರನಿಗೆ ವಿರೋಧಿಯಲ್ಲವೆ! ನೀನು
ಅವನಿಗಿಂತ ಉತ್ತಮನಂತೆ ನಟಿಸಿದೆ!
23 ನೀನು ಯೆಹೋವನನ್ನು ನಿಂದಿಸಲು ನಿನ್ನ ಸಂದೇಶ
ಕರನ್ನು ಬಳಸಿದೆ. ‘‘ನಾನು ನನ್ನ ಅನೇಕ ರಥಗ
ಳೊಂದಿಗೆ ಉನ್ನತ ಗಿರಿಗಳಿಗೆ ಬಂದೆನು. ನಾನು

ಲೆಬನೋನಿನ ದುರ್ಗಮ ಸ್ಥಳಗಳಿಗೆ ಹೋದೆನು.
ನಾನು ಲೆಬನೋನಿನ ಎತ್ತರವಾದ ದೇವದಾರು
ಮರಗಳನ್ನೂ ಲೆಬನೋನಿನ ಉತ್ತಮ ತುರಾಯಿ
ಮರಗಳನ್ನೂ ಕಡಿದುರುಳಿಸಿದೆನು.
24 ನಾನು ಬಾವಿಗಳನ್ನು ತೋಡಿ ಹೊಸ ಸ್ಥಳಗಳಲ್ಲಿ
ನೀರು ಕುಡಿದೆನು. ನಾನು ಈಜಿಪ್ಟಿನ ನದಿಗಳನ್ನು
ಬತ್ತಿಸಿದ್ದೇನೆ; ಆ ದೇಶದ ಮೇಲೆಲ್ಲಾ ನಡೆದಾಡಿ
ದ್ದೇನೆ'' ಎಂದು ನೀನು ಹೇಳಿದೆ.
25 ಆದರೆ ನೀನು ಕೇಳಿಲ್ಲವೇ? ''ನಾನು ಬಹುಕಾಲದ
ಹಿಂದೆಯೇ ಅದನ್ನು ಯೋಜಿಸಿದ್ದೆನು. ಪುರಾತನ
ಕಾಲದಿಂದಲೇ ಅದನ್ನು ಆಲೋಚಿಸಿದ್ದೆನು, ಈಗ
ನಾನು ಅದನ್ನು ನೆರವೇರಿಸಿದ್ದೇನೆ. ನೀನು ಬಲಾಢ್ಯ
ನಗರಗಳನ್ನು ಹಾಳುದಿಬ್ಬಗಳನ್ನಾಗಿ ಮಾಡಲು
ಅವಕಾಶ ನೀಡಿದವನು ನಾನೇ.
26 ನಗರಗಳಲ್ಲಿ ವಾಸಿಸುವ ಜನರು ಬಲವಿಲ್ಲದವರಾಗಿ
ನಿರಾಶೆಯಿಂದ ಗಲಿಬಿಲಿಗೊಂಡರು. ಜನರು
ಹೊಲಗಳಲ್ಲಿನ ಹುಲ್ಲಿನಂತೆಯೂ ಹಸಿರು ಗಿಡಗ
ಳಂತೆಯೂ ಮಾಳಿಗೆಯ ಮೇಲೆ ಒಣಗಿ
ಹಾಳಾಗುವ ಹುಲ್ಲಿನಂತೆಯೂ ಇದ್ದರು.
27 ನೀನು ಮೇಲೇಳುವುದೂ ಕುಳಿತುಕೊಳ್ಳುವುದೂ
ನನಗೆ ಗೊತ್ತಿದೆ. ನೀನು ಒಳಗೆ ಬರುವುದೂ
ಹೊರಗೆ ಹೋಗುವುದೂ ನನಗೆ ತಿಳಿದಿದೆ. ನೀನು
ನನ್ನ ವಿರುದ್ಧ ಯಾವಾಗ ದಂಗೆಯೇಳುವೆ
ಎಂಬುದೂ ನನಗೆ ತಿಳಿದಿದೆ.
28 ನೀನು ನನ್ನ ವಿರುದ್ಧ ದಂಗೆ ಎದ್ದಿರುವೆ. ನಿನ್ನ ಗರ್ವದ
ನಿಂದನೆಯನ್ನು ನಾನು ಕೇಳಿರುವೆ. ಆದ್ದರಿಂದ
ನಾನು ನಿನ್ನ ಬಾಯಿಗೆ ಕಡಿವಾಣವನ್ನು ಹಾಕಿ ನೀನು
ಬಂದ ದಾರಿಯಲ್ಲಿಯೇ ಹಿಂದಿರುಗುವಂತೆ
ಮಾಡುತ್ತೇನೆ.''

### ಹಿಜ್ಕೀಯನಿಗೆ ಯೆಹೋವನ ಸಂದೇಶ

29''ನಾನು ನಿನಗೆ ಸಹಾಯ ಮಾಡುತ್ತೇನೆಂಬುದಕ್ಕೆ
ಇದು ಸಾಕ್ಷಿಯ ಗುರುತಾಗಿದೆ: ಈ ವರ್ಷ ನೀವು ತನಾ
ಗಿಯೇ ಬೆಳೆಯುವ ಧಾನ್ಯವನ್ನು ತಿನ್ನುತ್ತೀರಿ. ಮುಂದಿನ
ವರ್ಷ ನೀವು ಬೀಜದಿಂದ ಬೆಳೆಯುವ ಧಾನ್ಯವನ್ನು
ತಿನ್ನುತ್ತೀರಿ. ಆದರೆ ಮೂರನೆಯ ವರ್ಷದಲ್ಲಿ ನೀವು
ಬೆಳೆಸಿದ ಧಾನ್ಯವನ್ನು ಒಟ್ಟುಗೂಡಿಸುತ್ತೀರಿ. ನೀವು ದ್ರಾಕ್ಷಿ
ತೋಟಗಳನ್ನು ಬೆಳೆಸುತ್ತೀರಿ; ಅವುಗಳ ದ್ರಾಕ್ಷಿಯನ್ನು
ತಿನ್ನುತ್ತೀರಿ. 30ಅಳಿದುಳಿದವರು (ಬದುಕಿಕೊಂಡ
ಯೆಹೂದ ಕುಲದವರು) ಮತ್ತೆ ವೃದ್ಧಿಯಾಗುವರು.
ಅವರು ಆಳವಾಗಿ ಬೇರೂರಿ ಫಲವನ್ನು ಫಲಿಸುವರು.
31ಜೆರುಸಲೇಮಿನಲ್ಲಿ ಉಳಿದವರು ಹರಡಿಕೊಳ್ಳುವರು;
ಚಿಯೋನ್ ಪರ್ವತದಲ್ಲಿ ತಪ್ಪಿಸಿಕೊಂಡವರು ಅಭಿವೃದ್ಧಿ
ಹೊಂದುವರು; ಯೆಹೋವನ ಸ್ವಾಭಿಮಾನವೇ ಇದನ್ನು
ನೆರವೇರಿಸುವುದು.
32''ಯೆಹೋವನು ಅಶ್ಶೂರದ ರಾಜನನ್ನು ಕುರಿತು
ಇಂತೆನ್ನುತ್ತಾನೆ:

ಅವನು ಈ ನಗರದೊಳಕ್ಕೆ ಬರುವುದಿಲ್ಲ. ಅವನು
ಈ ನಗರದಲ್ಲಿ ಒಂದು ಬಾಣವನ್ನೂ ಎಸೆಯು
ವುದಿಲ್ಲ. ಅವನು ಈ ನಗರದ ವಿರುದ್ಧ ಗುರಾಣಿ
ಗಳೊಂದಿಗೆ ಬರುವುದಿಲ್ಲ. ಅವನು ಈ ನಗರವನ್ನು
ಮುತ್ತಲು ಮಣ್ಣಿನ ದಿಬ್ಬವನ್ನು ನಿರ್ಮಿಸುವುದಿಲ್ಲ.
33 ಅವನು ತಾನು ಬಂದ ದಾರಿಯಲ್ಲೇ ಹಿಂದಕ್ಕೆ
ಹೋಗುತ್ತಾನೆ. ಅವನು ಈ ನಗರದೊಳಕ್ಕೆ ಬರು
ವುದಿಲ್ಲ. ಯೆಹೋವನೇ ಇದನ್ನು ನುಡಿದಿದ್ದಾನೆ.
34 ನಾನು ಈ ನಗರವನ್ನು ಕಾಪಾಡುತ್ತೇನೆ ಮತ್ತು
ಇದನ್ನು ರಕ್ಷಿಸುತ್ತೇನೆ. ನನಗಾಗಿಯೂ ನನ್ನ ಸೇವಕ
ನಾದ ದಾವೀದನಿಗಾಗಿಯೂ ನಾನು ಇದನ್ನು
ಮಾಡುತ್ತೇನೆ.''

### ಅಶ್ಶೂರದ ಸೇನೆಯು ನಾಶಗೊಳಿಸಲ್ಪಟ್ಟಿತು

35ಆ ರಾತ್ರಿ ಯೆಹೋವನ ದೂತನು ಹೊರಕ್ಕೆ ಹೋಗಿ,
ಅಶ್ಶೂರದ ಶಿಬಿರದಲ್ಲಿ ಒಂದುಲಕ್ಷದ ಎಂಭತ್ತೈದು ಸಾವಿರ
ಜನರನ್ನು ಕೊಂದುಹಾಕಿದನು. ಜನರು ಬೆಳಗಿನ ಜಾವ
ದಲ್ಲಿ ಮೇಲಕ್ಕೆದ್ದಾಗ ಸತ್ತ ದೇಹಗಳನ್ನು ನೋಡಿದರು.
36ಆಗ ಅಶ್ಶೂರದ ರಾಜನಾದ ಸನ್ಹೇರೀಬನು ತಾನು
ವಾಸಿಸುತ್ತಿದ್ದ ನಿನವೆಗೆ ಹಿಂದಿರುಗಿಹೋದನು. 37ಸನ್ಹೇರೀ
ಬನು ಒಂದು ದಿನ ತನ್ನ ದೇವರಾದ ನಿಸ್ರೋಕನನ್ನು
ಆಲಯದಲ್ಲಿ ಆರಾಧಿಸುತ್ತಿದ್ದನು. ಅವನ ಮಕ್ಕಳಾದ
ಅದ್ರಮ್ಮೆಲೆಕ್ ಮತ್ತು ಸರೆಚೆರ್ ಅವನನ್ನು ಖಡ್ಗದಿಂದ
ಇರಿದುಕೊಂದರು. ನಂತರ ಅದ್ರಮ್ಮೆಲೆಕ್ ಮತ್ತು
ಸರೆಚೆರ್ ಅರರಾಟ್ ದೇಶಕ್ಕೆ ತಪ್ಪಿಸಿಕೊಂಡು
ಹೋದರು. ಸನ್ಹೇರೀಬನ ಮಗನಾದ ಏಸರ್‌ಹದ್ದೋ
ನನು ಅವನ ನಂತರ ಹೊಸ ರಾಜನಾದನು.

### ಹಿಜ್ಕೀಯನಿಗೆ ಕಾಯಿಲೆ

20 ಆ ಸಮಯದಲ್ಲಿ ಹಿಜ್ಕೀಯನಿಗೆ ಕಾಯಿಲೆಯಾಗಿ
ಸತ್ತಂತಾದನು. ಆಮೋಚನ ಮಗನೂ ಪ್ರವಾ
ದಿಯೂ ಆದ ಯೆಶಾಯನು ಹಿಜ್ಕೀಯನ ಬಳಿಗೆ ಹೋಗಿ,
''ಯೆಹೋವನು ಇಂತೆನ್ನುತ್ತಾನೆ: 'ನಿನ್ನ ಮನೆಯನ್ನು
ವ್ಯವಸ್ಥೆಗೊಳಿಸು; ಏಕೆಂದರೆ ನೀನು ಸಾಯುವೆ, ಬದುಕು
ವುದಿಲ್ಲ!'' ಎಂದು ಹೇಳಿದನು.
2ಹಿಜ್ಕೀಯನು ತನ್ನ ಮುಖವನ್ನು ಗೋಡೆಯ ಕಡೆಗೆ
ತಿರುಗಿಸಿ ಯೆಹೋವನಲ್ಲಿ ಪ್ರಾರ್ಥಿಸುತ್ತಾ, 3''ಯೆಹೋ
ವನೇ, ನಾನು ಪೂರ್ಣಮನಸ್ಸಿನಿಂದ ನಿಜವಾಗಿಯೂ ನಿನ್ನ

ಸೇವೆಮಾಡಿದ್ದೇನೆಂಬುದನ್ನು ನೆನಪು ಮಾಡಿಕೊ. ನೀನು
ಯೋಗ್ಯವೆಂದು ಹೇಳಿದವುಗಳನ್ನು ನಾನು ಮಾಡಿದೆನು''
ಎಂದು ಹೇಳಿದನು. ನಂತರ ಹಿಜ್ಕೀಯನು ಬಹಳ
ಜೋರಾಗಿ ಗೋಳಾಡಿದನು.

4ಯೆಶಾಯನು ಮಧ್ಯಪ್ರಾಕಾರವನ್ನು ಬಿಡುವುದಕ್ಕೆ
ಮುಂಚೆಯೇ, ಯೆಹೋವನ ವಾಕ್ಯವು ಅವನಿಗೆ ಬಂದಿತು.
ಯೆಹೋವನು 5''ಹಿಂದಿರುಗಿ ಹೋಗಿ, ನನ್ನ ಜನರ
ನಾಯಕನಾದ ಹಿಜ್ಕೀಯನಿಗೆ ಇದನ್ನು ಹೇಳು: 'ನಿನ್ನ
ಪೂರ್ವಿಕನಾದ ದಾವೀದನ ದೇವರಾದ ಯೆಹೋವನು
ಇಂತೆನ್ನುತ್ತಾನೆ: 'ನಾನು ನಿನ್ನ ಪ್ರಾರ್ಥನೆಯನ್ನು ಕೇಳಿ
ದೆನು; ನಿನ್ನ ಕಣ್ಣೀರನ್ನು ನೋಡಿದೆನು. ಆದ್ದರಿಂದ ನಾನು
ನಿನ್ನನ್ನು ಗುಣಪಡಿಸುತ್ತೇನೆ. ಮೂರನೆಯ ದಿನ, ನೀನು
ದೇವಾಲಯದ ಮೇಲಿನವರೆಗೆ ಹೋಗುವೆ. 6ನಾನು ನಿನ್ನ
ಜೀವಕ್ಕೆ ಹದಿನೈದು ವರ್ಷಗಳನ್ನು ಕೂಡಿಸುತ್ತೇನೆ. ನಾನು
ನಿನ್ನನ್ನು ಮತ್ತು ಈ ನಗರವನ್ನು ಅಶ್ಶೂರದ ರಾಜನ
ಅಧಿಕಾರದಿಂದ ರಕ್ಷಿಸುತ್ತೇನೆ. ನಾನು ಈ ನಗರವನ್ನು
ಸಂರಕ್ಷಿಸುತ್ತೇನೆ. ನಾನು ನನ್ನ ಸೇವಕನಾದ ದಾವೀದನಿಗೆ
ವಾಗ್ದಾನ ಮಾಡಿದ್ದಕ್ಕಾಗಿಯೂ ನನಗಾಗಿಯೂ ಇದನ್ನು
ಮಾಡುತ್ತೇನೆ'' ಎಂದು ಹೇಳಿದನು. 7ಆಗ ಯೆಶಾಯನು,
''ಅಂಜೂರಹಣ್ಣಿನಿಂದ ಒಂದು ಉಂಡೆಯನ್ನು ಮಾಡಿಸಿ
ಅದನ್ನು ಕುರುವಿನ ಮೇಲೆ ಇಡು'' ಎಂದು ಹೇಳಿದನು.

ಅಂತೆಯೇ ಅವರು ಅಂಜೂರಹಣ್ಣಿನ ಒಂದು ಉಂಡೆ
ಯನ್ನು ಹಿಜ್ಕೀಯನ ಕುರುವಿನ ಮೇಲೆ ಇಟ್ಟರು. ಆಗ
ಹಿಜ್ಕೀಯನಿಗೆ ಗುಣವಾಯಿತು.

### ಹಿಜ್ಕೀಯನು ಗುಣಮುಖನಾಗುತ್ತಾನೆಂಬುದಕ್ಕೆ ಗುರುತು

8ಹಿಜ್ಕೀಯನು ಯೆಶಾಯನಿಗೆ, ''ಯೆಹೋವನು
ನನ್ನನ್ನು ಗುಣಪಡಿಸುತ್ತಾನೆಂಬುದಕ್ಕೆ ಮತ್ತು ಮೂರನೆಯ
ದಿನ ನಾನು ದೇವಾಲಯದವರೆಗೆ ಹೋಗುವೆನೆಂಬುದಕ್ಕೆ
ಏನು ಗುರುತು?''ಎಂದು ಕೇಳಿದನು.

9ಯೆಶಾಯನು, ''ನೆರಳು ಹತ್ತು ಮೆಟ್ಟಲು ಮುಂದಕ್ಕೆ
ಹೋಗಬೇಕೋ ಅಥವಾ ಹತ್ತು ಮೆಟ್ಟಲು ಹಿಂದಕ್ಕೆ
ಹೋಗಬೇಕೋ?* ನಿನಗೆ ಯಾವುದು ಬೇಕಾಗಿದೆ?
ಯೆಹೋವನು ತಾನು ಹೇಳಿದ್ದನ್ನು ಮಾಡುತ್ತಾನೆಂಬು
ದಕ್ಕೆ ಇದೇ ನಿನಗೆ ಗುರುತು''ಎಂದು ಹೇಳಿದನು.

10ಹಿಜ್ಕೀಯನು, ''ನೆರಳು ಮುಂದೆ ಹೋಗುವುದು
ಸುಲಭ, ಆದ್ದರಿಂದ ಹತ್ತು ಮೆಟ್ಟಲು ಹಿಂದೆ ಬರುವಂತೆ
ಮಾಡು'' ಎಂದು ಉತ್ತರಿಸಿದನು.

11ಆಗ ಯೆಶಾಯನು ಯೆಹೋವನಲ್ಲಿ ಪ್ರಾರ್ಥಿಸಿ
ದನು. ಯೆಹೋವನು ಈಗಾಗಲೇ ಹತ್ತು ಮೆಟ್ಟಲು
ಮುಂದೆ ಹೋಗಿದ್ದ ನೆರಳನ್ನು ಹತ್ತು ಮೆಟ್ಟಲು ಹಿಂದಕ್ಕೆ
ಬರುವಂತೆ ಮಾಡಿದನು.

### ಹಿಜ್ಕೀಯನು ತನ್ನ ಭಂಡಾರವನ್ನು ಬಾಬಿಲೋನಿನ ಜನರಿಗೆ ತೋರಿಸಿದನು

12ಆ ಸಮಯದಲ್ಲಿ, ಬಲದಾನನ ಮಗನಾದ
ಬೆರೋದಕ ಬಲದಾನ ಎಂಬುವನು ಬಾಬಿಲೋನಿನ
ರಾಜನಾಗಿದ್ದನು. ಅವನು ಹಿಜ್ಕೀಯನಿಗೆ ಪತ್ರಗಳನ್ನು
ಮತ್ತು ಕಾಣಿಕೆಯನ್ನು ಕಳುಹಿಸಿದನು. ಹಿಜ್ಕೀಯನು
ಅಸ್ವಸ್ಥನಾಗಿದ್ದಾನೆ ಎಂಬುದನ್ನು ಬೆರೋದಕ ಬಲದಾ
ನನು ತಿಳಿದುಕೊಂಡದ್ದರಿಂದ ಹೀಗೆ ಮಾಡಿದನು.
13ಹಿಜ್ಕೀಯನು ಬಾಬಿಲೋನಿನ ಜನರನ್ನು ಸ್ವಾಗತಿಸಿ,
ಅವರಿಗೆ ತನ್ನ ಮನೆಯಲ್ಲಿದ್ದ ಎಲ್ಲಾ ಬೆಲೆಬಾಳುವ ವಸ್ತು
ಗಳನ್ನು ತೋರಿಸಿದನು. ಅವನು ತನ್ನ ಭಂಡಾರದಲ್ಲಿದ್ದ
ಬೆಳ್ಳಿಬಂಗಾರಗಳನ್ನು, ಸುಗಂಧದ್ರವ್ಯಗಳನ್ನು, ಪರಿಮಳ
ಭರಿತ ತೈಲವನ್ನು, ಆಯುಧಗಳನ್ನು ತೋರಿಸಿದನು.
ಹಿಜ್ಕೀಯನ ಮನೆಯಲ್ಲಿ ಮತ್ತು ಅವನ ರಾಜ್ಯದಲ್ಲಿ
ಅವರಿಗೆ ತೋರಿಸದೆ ಉಳಿದದ್ದು ಏನೂ ಇರಲಿಲ್ಲ.

14ನಂತರ ಪ್ರವಾದಿಯಾದ ಯೆಶಾಯನು ರಾಜನಾದ
ಹಿಜ್ಕೀಯನ ಬಳಿಗೆ ಬಂದು, ''ಈ ಜನರು ಹೇಳುವು
ದೇನು? ಇವರು ಎಲ್ಲಿಂದ ಬಂದರು?'' ಎಂದು
ಕೇಳಿದನು.

ಹಿಜ್ಕೀಯನು, ''ಅವರು ಬಹಳ ದೂರದೇಶದಿಂದ,
ಬಾಬಿಲೋನಿನಿಂದ ಬಂದಿದ್ದಾರೆ'' ಎಂದನು.

15ಯೆಶಾಯನು, ''ಅವರು ನಿನ್ನ ಮನೆಯಲ್ಲಿ ಏನನ್ನು
ನೋಡಿದರು?'' ಎಂದು ಕೇಳಿದನು.

ಹಿಜ್ಕೀಯನು, ''ಅವರು ನನ್ನ ಮನೆಯಲ್ಲಿರುವು
ದನ್ನೆಲ್ಲಾ ನೋಡಿದರು. ಅವರಿಗೆ ತೋರಿಸದೆ ಉಳಿದಿರು
ವುದು ನನ್ನ ಭಂಡಾರದಲ್ಲಿ ಏನೂ ಇಲ್ಲ'' ಎಂದು
ಉತ್ತರಿಸಿದನು.

16ಆಗ ಯೆಶಾಯನು ಹಿಜ್ಕೀಯನಿಗೆ, ''ಯೆಹೋವ
ನಿಂದ ಬಂದ ಈ ಸಂದೇಶವನ್ನು ಆಲಿಸು. 17ನಿನ್ನ ಮನೆ
ಯಲ್ಲಿರುವ ವಸ್ತುಗಳೆಲ್ಲವನ್ನು ನಿನ್ನ ಮನೆಯಿಂದ ಬಾಬಿ
ಲೋನಿಗೆ ಕೊಂಡೊಯ್ಯುವ ಕಾಲವು ಬರುತ್ತಿದೆ; ನಿನ್ನ
ಪೂರ್ವಿಕರು ಇಂದಿನವರೆಗೆ ರಕ್ಷಿಸಿದ ವಸ್ತುಗಳೆಲ್ಲವನ್ನು
ಬಾಬಿಲೋನಿಗೆ ತೆಗೆದುಕೊಂಡು ಹೋಗುವ ಸಮಯವು
ಬರುತ್ತಿದೆ. ಏನನ್ನೂ ಬಿಡುವುದಿಲ್ಲ! ಯೆಹೋವನೇ
ಇದನ್ನು ನುಡಿದಿದ್ದಾನೆ. 18ಬಾಬಿಲೋನಿನವರು ನಿನ್ನ
ಮಕ್ಕಳನ್ನೂ ತೆಗೆದುಕೊಂಡು ಹೋಗುವರು. ನಿನ್ನ
ಮಕ್ಕಳು ಬಾಬಿಲೋನಿನ ರಾಜನ ಅರಮನೆಯಲ್ಲಿ ಕಂಚು
ಕಿಗಳಾಗುತ್ತಾರೆ'' ಎಂದು ಹೇಳಿದನು.

---

**ನೆರಳು … ಹೋಗಬೇಕೋ?** ಹಿಜ್ಕೀಯನು ಗಡಿಯಾರದಂತೆ ಬಳಸುತ್ತಿದ್ದ ಒಂದು ವಿಶೇಷ ಕಟ್ಟಡವು ಹೊರಗಡೆಯಿದ್ದಿತು. ಸೂರ್ಯ ಕಿರಣಗಳು ಮೆಟ್ಟಲಿನ ಮೇಲೆ ಬಿದ್ದಾಗ, ನೆರಳು ಆ ದಿನದ ಸಮಯವನ್ನು ತೋರಿಸುತ್ತಿತ್ತು ಎಂಬುದು ಇದರ ಅರ್ಥ.

19ಹಿಜ್ಕೀಯನು ತನ್ನ ಜೀವಮಾನದಲ್ಲಿ ಹೇಗೂ
ಶಾಂತಿಯಿರುವುದೆಂದು ತಿಳಿದುಕೊಂಡು ಯೆಶಾಯನಿಗೆ,
''ಯೆಹೋವನ ಈ ಸಂದೇಶವು ಒಳ್ಳೆಯದಾಗಿದೆ'' ಎಂದು
ಹೇಳಿದನು.
20''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಹಿಜ್ಕೀಯನು ಮಾಡಿದ ಇತರ ಎಲ್ಲಾ ಮಹಾ
ಕಾರ್ಯಗಳನ್ನೂ ಅವನು ನಗರಕ್ಕೆ ಕೆರೆಯಿಂದ ಕೊಳವೆ
ಗಳ ಮೂಲಕ ನೀರಿನ ವ್ಯವಸ್ಥೆಮಾಡಿದ್ದನ್ನೂ ಬರೆಯ
ಲಾಗಿದೆ.
21ಹಿಜ್ಕೀಯನು ತೀರಿಕೊಂಡಾಗ ಅವನನ್ನು ಅವನ
ಪೂರ್ವಿಕರ ಬಳಿ ಸಮಾಧಿಮಾಡಲಾಯಿತು. ಹಿಜ್ಕೀಯನ
ನಂತರ ಅವನ ಮಗನಾದ ಮನಸ್ಸೆಯು ಹೊಸ
ರಾಜನಾದನು.

## ಮನಸ್ಸೆಯು ತನ್ನ ಕೆಟ್ಟ ಆಳ್ವಿಕೆಯನ್ನು ಯೆಹೂದದಲ್ಲಿ ಆರಂಭಿಸಿದನು

21 ಮನಸ್ಸೆಯು ಆಳಲಾರಂಭಿಸಿದಾಗ ಅವನಿಗೆ ಹನ್ನೆ
ರಡು ವರ್ಷ ವಯಸ್ಸಾಗಿತ್ತು. ಅವನು ಐವತ್ತೈದು
ವರ್ಷ ಜೆರುಸಲೇಮಿನಲ್ಲಿ ಆಳಿದನು. ಅವನ ತಾಯಿಯ
ಹೆಸರು ಹೆಪ್ಜಿಬಾ.
2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಮನಸ್ಸೆಯು ಮಾಡಿದನು. ಇಸ್ರೇಲರು ತಮ್ಮ ದೇಶಕ್ಕೆ
ಬಂದಾಗ ಯೆಹೋವನು ಹೊರಗಟ್ಟಿದ ಅನ್ಯಜನಾಂಗ
ಗಳ ಅಸಹ್ಯ ಕಾರ್ಯಗಳನ್ನು ಮನಸ್ಸೆಯು ಮಾಡಿದನು.
3ಮನಸ್ಸೆಯು ತನ್ನ ತಂದೆಯಾದ ಹಿಜ್ಕೀಯನು ನಾಶ
ಪಡಿಸಿದ್ದ ಉನ್ನತಸ್ಥಳಗಳನ್ನು ಮತ್ತೆ ನಿರ್ಮಿಸಿದನು.
ಮನಸ್ಸೆಯು ಇಸ್ರೇಲಿನ ರಾಜನಾದ ಅಹಾಬನಂತೆ ಬಾಳನಿ
ಗಾಗಿ ಯಜ್ಞವೇದಿಕೆಯನ್ನು ಮತ್ತು ಅಶೇರಸ್ತಂಭಗಳನ್ನು
ನಿರ್ಮಿಸಿದನು. ಮನಸ್ಸೆಯು ಪರಲೋಕದ ನಕ್ಷತ್ರಗಳನ್ನು
ಆರಾಧಿಸಿ ಅವುಗಳ ಸೇವೆಮಾಡಿದನು. 4ಮನಸ್ಸೆಯು
ಸುಳ್ಳುದೇವತೆಗಳನ್ನು ಗೌರವಿಸಲು ದೇವಾಲಯದಲ್ಲಿ
ಯಜ್ಞವೇದಿಕೆಗಳನ್ನು ನಿರ್ಮಿಸಿದನು. (''ನಾನು ನನ್ನ
ಹೆಸರನ್ನು ಜೆರುಸಲೇಮಿನಲ್ಲಿ ಸ್ಥಾಪಿಸುತ್ತೇನೆ'' ಎಂದು
ಯೆಹೋವನು ಮಾತನಾಡುವಾಗ ಹೇಳುತ್ತಿದ್ದ ಸ್ಥಳವು
ಇದೇ ಆಗಿತ್ತು.) 5ಮನಸ್ಸೆಯು ಪರಲೋಕದ ನಕ್ಷತ್ರಗಳಿ
ಗಾಗಿ ದೇವಾಲಯದ ಎರಡು ಪ್ರಾಕಾರಗಳಲ್ಲಿ ಯಜ್ಞ
ವೇದಿಕೆಗಳನ್ನು ನಿರ್ಮಿಸಿದನು. 6ಮನಸ್ಸೆಯು ತನ್ನ ಮಗ
ನನ್ನು ಆಹುತಿಕೊಟ್ಟು ಅವನನ್ನು ಯಜ್ಞವೇದಿಕೆಯ ಮೇಲೆ
ಹೋಮಮಾಡಿದನು. ಮನಸ್ಸೆಯು ಭವಿಷ್ಯತ್ಕಾಲವನ್ನು
ಅರಿಯಲು ಅನೇಕ ಮಾರ್ಗಗಳಲ್ಲಿ ಪ್ರಯತ್ನಿಸುತ್ತಿದ್ದನು.
ಅವನು ಪ್ರೇತಾತ್ಮಗಳನ್ನು ವಶಪಡಿಸಿ ಕೊಂಡಿರುವ
ಮಾಂತ್ರಿಕರನ್ನು ಮತ್ತು ತಾಂತ್ರಿಕರನ್ನು ಭೇಟಿ
ಮಾಡಿದನು.
ಯೆಹೋವನು ಕೆಟ್ಟದ್ದೆಂದು ಹೇಳಿದ ಅನೇಕಾನೇಕ
ಕಾರ್ಯಗಳನ್ನು ಮನಸ್ಸೆಯು ಮಾಡಿದನು. ಯೆಹೋ
ವನು ಕೋಪಗೊಳ್ಳಲು ಇದು ಕಾರಣವಾಯಿತು.
7ಮನಸ್ಸೆಯು ಅಶೇರ ವಿಗ್ರಹಗಳನ್ನು ಕೆತ್ತಿಸಿದನು. ಅವನು
ಈ ವಿಗ್ರಹವನ್ನು ಆಲಯದಲ್ಲಿ ಇರಿಸಿದನು. ಯೆಹೋ
ವನು ದಾವೀದನಿಗೆ ಮತ್ತು ದಾವೀದನ ಮಗನಾದ
ಸೊಲೊಮೋನನಿಗೆ ಈ ಆಲಯವನ್ನು ಕುರಿತು ಹೀಗೆ
ಹೇಳಿದ್ದನು: ''ಇಸ್ರೇಲಿನಲ್ಲಿರುವ ಎಲ್ಲಾ ನಗರಗಳಿಂದ
ನಾನು ಜೆರುಸಲೇಮನ್ನು ಆರಿಸಿದ್ದೇನೆ. ನಾನು ನನ್ನ
ಹೆಸರನ್ನು ಜೆರುಸಲೇಮಿನ ಆಲಯದಲ್ಲಿ ಎಂದೆಂದಿಗೂ
ಇರಿಸುತ್ತೇನೆ. 8ಇಸ್ರೇಲಿನ ಜನರು ತಮ್ಮ ದೇಶವನ್ನು
ತೊರೆದು ಅಲೆದಾಡದೆ ತಮ್ಮ ಪೂರ್ವಿಕರಿಗೆ ಕೊಡಲ್ಪಟ್ಟ
ದೇಶದಲ್ಲಿಯೇ ನೆಲೆಸುವಂತೆ ನಾನು ಮಾಡುತ್ತೇನೆ.
ನಾನು ನನ್ನ ಸೇವಕನಾದ ಮೋಶೆಯ ಮೂಲಕ ಅವರಿಗೆ
ಬೋಧಿಸಿದ ಆಜ್ಞೆಗಳಿಗೆಲ್ಲಾ ಅವರು ವಿಧೇಯರಾಗಿದ್ದರೆ,
ನಾನು ಅವರನ್ನು ಅವರ ದೇಶದಲ್ಲಿ ನೆಲೆಗೊಳಿಸುವೆನು.''
9ಆದರೆ ಜನರು ದೇವರ ಮಾತನ್ನು ಆಲಿಸಲಿಲ್ಲ. ಇಸ್ರೇ
ಲರು ಕಾನನಿಗೆ ಬರುವುದಕ್ಕೆ ಮುಂಚೆ ಅಲ್ಲಿ ವಾಸಿಸುತ್ತಿದ್ದ
ಜನಾಂಗಗಳು ಮಾಡಿದ್ದಕ್ಕಿಂತ ಹೆಚ್ಚು ಕೆಟ್ಟಕಾರ್ಯಗಳನ್ನು
ಮನಸ್ಸೆಯು ಮಾಡಿದನು. ಇಸ್ರೇಲರು ಅವರ ದೇಶಗ
ಳನ್ನು ವಶಪಡಿಸಿಕೊಳ್ಳಲು ಬಂದಾಗ ಯೆಹೋವನು ಆ
ಜನಾಂಗಗಳನ್ನು ನಾಶಪಡಿಸಿದ್ದನು.
10ಯೆಹೋವನು ತನ್ನ ಸೇವಕರಾದ ಪ್ರವಾದಿಗಳಿಂದ
ಈ ಸಂಗತಿಗಳನ್ನು ತಿಳಿಸಿದನು. 11''ಯೆಹೂದದ ರಾಜ
ನಾದ ಮನಸ್ಸೆಯು ತನಗಿಂತಲೂ ಮುಂಚೆ ಇದ್ದ
ಅಮೋರಿಯರಿಗಿಂತ ಹೆಚ್ಚು ಅಸಹ್ಯವಾದ ಕೃತ್ಯಗಳನ್ನು
ಮಾಡಿದನು. ಮನಸ್ಸೆಯು ತನ್ನ ವಿಗ್ರಹಗಳಿಂದ ಯೆಹೂ
ದವನ್ನು ಪಾಪಕ್ಕೆ ಪ್ರೇರೇಪಿಸಿದನು. 12ಆದ್ದರಿಂದ ಇಸ್ರೇ
ಲಿನ ದೇವರು ಇಂತೆನ್ನುತ್ತಾನೆ: 'ಇಗೋ, ಜೆರುಸಲೇ
ಮಿಗೂ ಯೆಹೂದಕ್ಕೂ ಎಷ್ಟು ತೊಂದರೆಯನ್ನು ತರುತ್ತೇ
ನೆಂದರೆ, ಅದನ್ನು ಕೇಳಿದ ಯಾರಾದರೂ ನಡುಗಿ
ಬಿಡಬೇಕು. 13ನಾನು ಸಮಾರ್ಯದ ಮೇಲೆ ಚಾಚಿದ
ಮಟ್ಟಗೋಲನ್ನೂ ಅಹಾಬನ ಕುಟುಂಬದ ಮೇಲಿಟ್ಟ
ತೂಕದ ಗುಂಡನ್ನೂ ಜೆರುಸಲೇಮಿನ ಮೇಲೆ ಚಾಚು
ತ್ತೇನೆ. ಒಬ್ಬನು ಒಂದು ಪಾತ್ರೆಯನ್ನು ಒರೆಸಿ, ಅದನ್ನು
ಕೆಳಮುಖವಾಗಿ ತಿರುಗಿಸುವಂತೆ ನಾನು ಜೆರುಸಲೇಮಿಗೆ
ಮಾಡುತ್ತೇನೆ. 14ಆದರೂ ಅಲ್ಲಿ ನನ್ನ ಕೆಲವು ಜನರು
ಉಳಿದುಕೊಳ್ಳುತ್ತಾರೆ. ನಾನು ಅವರನ್ನು ಬಿಟ್ಟು
ಬಿಡುತ್ತೇನೆ. ನಾನು ಅವರನ್ನು ಅವರ ಶತ್ರುಗಳಿಗೆ
ಒಪ್ಪಿಸುತ್ತೇನೆ. ಅವರ ಶತ್ರುಗಳು ಅವರನ್ನು ಸೆರೆಯಾಳು
ಗಳನ್ನಾಗಿ ಇಟ್ಟುಕೊಳ್ಳುವರು; ಯುದ್ಧಗಳಲ್ಲಿ ಸೈನಿಕರು
ವಶಪಡಿಸಿಕೊಳ್ಳುವ ಬೆಲೆಯುಳ್ಳ ವಸ್ತುಗಳಂತೆ ಅವರಿ
ರುವರು. 15ಏಕೆಂದರೆ ನಾನು ಕೆಟ್ಟದ್ದೆಂದು ಹೇಳಿದ

ಕಾರ್ಯಗಳನ್ನೇ ನನ್ನ ಜನರು ಮಾಡಿದರು. ಅವರ
ಪೂರ್ವಿಕರು ಈಜಿಪ್ಟಿನಿಂದ ಹೊರಬಂದ ದಿನದಿಂದ
ಅವರು ನನ್ನನ್ನು ರೇಗಿಸಿದರು. [16]ಮನಸ್ಸೆಯು ಅನೇಕ ನಿರ
ಪರಾಧಿಗಳನ್ನು ಕೊಂದುಹಾಕಿದನು; ಜೆರುಸಲೇಮನ್ನು
ಒಂದು ಕೊನೆಯಿಂದ ಮತ್ತೊಂದು ಕೊನೆಯವರೆಗೆ ರಕ್ತ
ದಿಂದ ತುಂಬಿಸಿದನು. ಯೆಹೂದವನ್ನು ಪಾಪಕ್ಕೆ ಪ್ರೇರೇಪಿ
ಸಿದ್ದರ ಜೊತೆಗೆ ಅವನ ಈ ಪಾಪಗಳು ಕೂಡಿಕೊಂಡವು.
ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಯೆಹೂದವು ಮಾಡುವಂತೆ ಮನಸ್ಸೆಯು
ಪ್ರೇರೇಪಿಸಿದನು.''

[17]''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಮನಸ್ಸೆಯು ಮಾಡಿದ ಎಲ್ಲಾ ಕಾರ್ಯ
ಗಳನ್ನೂ ಅವನು ಮಾಡಿದ ಪಾಪಕಾರ್ಯಗಳನ್ನೂ
ಬರೆಯಲಾಗಿದೆ. [18]ಮನಸ್ಸೆಯು ಸತ್ತುಹೋದನು ಮತ್ತು
ಅವನನ್ನು ಅವನ ಪೂರ್ವಿಕರ ಬಳಿ ಸಮಾಧಿಮಾಡಿದರು.
ಮನಸ್ಸೆಯನ್ನು ಉಜ್ಜನವನದಲ್ಲಿ ಸಮಾಧಿಮಾಡಿದರು.
ಈ ವನವು ಅವನ ಸ್ವಂತ ಮನೆಯಲ್ಲಿತ್ತು. ಮನಸ್ಸೆಯ
ನಂತರ ಅವನ ಮಗನಾದ ಆಮೋನನು ಹೊಸ ರಾಜ
ನಾದನು.

### ಆಮೋನನ ಸ್ವಲ್ಪಕಾಲದ ಆಳ್ವಿಕೆ

[19]ಆಮೋನನು ಆಳಲಾರಂಭಿಸಿದಾಗ ಅವನಿಗೆ ಇಪ್ಪತ್ತೆ
ರಡು ವರ್ಷ ವಯಸ್ಸಾಗಿತ್ತು. ಅವನು ಎರಡು ವರ್ಷ
ಜೆರುಸಲೇಮಿನಲ್ಲಿ ಆಳಿದನು. ಅವನ ತಾಯಿಯ ಹೆಸರು
ಮೆಷುಲ್ಲೆಮೆತ್. ಅವಳು ಯೊಟ್ಬಾ ಊರಿನ ಹಾರೂಚನ
ಮಗಳು.

[20]ಆಮೋನನು ಅವನ ತಂದೆಯಾದ ಮನಸ್ಸೆಯಂತೆ
ಯೆಹೋವನು ಕೆಟ್ಟದ್ದೆಂದು ಹೇಳಿದವುಗಳನ್ನೆಲ್ಲಾ ಮಾಡಿ
ದನು. [21]ಆಮೋನನು ತನ್ನ ತಂದೆಯಂತೆ ಜೀವಿಸಿದ್ದನು.
ತನ್ನ ತಂದೆಯು ಪೂಜಿಸಿದ ವಿಗ್ರಹಗಳನ್ನು ಆಮೋನನು
ಪೂಜಿಸಿದನು. [22]ಆಮೋನನು ತನ್ನ ಪೂರ್ವಿಕರ ದೇವ
ರಾದ ಯೆಹೋವನನ್ನು ತ್ಯಜಿಸಿದನು ಮತ್ತು ಯೆಹೋ
ವನಿಗೆ ಮೆಚ್ಚಿಗೆಯಾದ ಮಾರ್ಗದಲ್ಲಿ ಜೀವಿಸಲಿಲ್ಲ.

[23]ಆಮೋನನ ಸೇವಕರು ಅವನ ವಿರುದ್ಧ ಒಳಸಂಚು
ಮಾಡಿದರು ಮತ್ತು ಅವನ ಸ್ವಂತ ಮನೆಯಲ್ಲಿಯೇ
ಅವನನ್ನು ಕೊಂದುಹಾಕಿದರು. [24]ರಾಜನಾದ ಆಮೋ
ನನ ವಿರುದ್ಧ ಒಳಸಂಚು ಮಾಡಿದ ಅವನ ಅಧಿಕಾರಿಗಳನ್ನು
ಆ ದೇಶದ ಜನಸಾಮಾನ್ಯರು ಕೊಂದುಹಾಕಿದರು.
ಆಮೋನನ ಮಗನಾದ ಯೋಷೀಯನನ್ನು ಜನರು
ಅವನ ನಂತರ ಹೊಸ ರಾಜನನ್ನಾಗಿ ಮಾಡಿದರು.

[25]''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಆಮೋನನು ಮಾಡಿದ ಇತರ ಕಾರ್ಯ
ಗಳನ್ನು ಕುರಿತು ಬರೆಯಲಾಗಿದೆ. [26]ಆಮೋನನನ್ನು
ಉಜ್ಜನ ವನದಲ್ಲಿ ಅವನ ಸ್ಮಶಾನದಲ್ಲಿ ಸಮಾಧಿ
ಮಾಡಿದರು. ಆಮೋನನ ಮಗನಾದ ಯೋಷೀಯನು
ಹೊಸ ರಾಜನಾದನು.

### ಯೋಷೀಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸುವನು

22 ಯೋಷೀಯನು ಆಳಲಾರಂಭಿಸಿದಾಗ ಅವನಿಗೆ
ಎಂಟು ವರ್ಷ ವಯಸ್ಸಾಗಿತ್ತು. ಅವನು ಮೂವ
ತ್ತೊಂದು ವರ್ಷ ಜೆರುಸಲೇಮಿನಲ್ಲಿ ಆಳಿದನು. ಅವನ
ತಾಯಿಯ ಹೆಸರು ಯದೀದಾ. ಇವಳು ಬೊಚ್ಕತ್ ಎಂಬ
ಸ್ಥಳದ ಅದಾಯ ಎಂಬವನ ಮಗಳು. [2]ಯೆಹೋವನು
ಯೋಗ್ಯವೆಂದು ಹೇಳಿದ ಕಾರ್ಯಗಳನ್ನು ಯೋಷೀ
ಯನು ಮಾಡಿದನು. ಯೋಷೀಯನು ತನ್ನ ಪೂರ್ವಿಕ
ನಾದ ದಾವೀದನಂತೆ ದೇವರನ್ನು ಅನುಸರಿಸಿದನು.
ಯೋಷೀಯನು ದೇವರ ಬೋಧನೆಗಳಲ್ಲಿ ಯಾವುದೇ
ಬದಲಾವಣೆ ಮಾಡದೆ ಅವುಗಳನ್ನು ಅನುಸರಿಸಿದನು.

### ಯೋಷೀಯನು ದೇವಾಲಯದ ದುರಸ್ತಿಗೆ ಆಜ್ಞಾಪಿಸುವನು

[3]ಯೋಷೀಯನು ರಾಜನಾಗಿದ್ದ ಹದಿನೆಂಟನೆಯ
ವರ್ಷದಲ್ಲಿ ಅಚೆಲ್ಯನ ಮಗನೂ ಮೆಷುಲ್ಲಾಮನ ಮೊಮ್ಮ
ಗನೂ ಕಾರ್ಯದರ್ಶಿಯೂ ಆದ ಶಾಫಾನನನ್ನು ದೇವಾ
ಲಯಕ್ಕೆ ಕಳುಹಿಸಿದನು. [4]ಯೋಷೀಯನು, ''ಮಹಾ
ಯಾಜಕನಾದ ಹಿಲ್ಕೀಯನ ಬಳಿಗೆ ಹೋಗು. ದ್ವಾರ
ಪಾಲಕರು ಜನರಿಂದ ಒಟ್ಟುಗೂಡಿಸಿರುವ ಹಣವನ್ನು
ಅವನು ಲೆಕ್ಕಿಸಲಿ. ಜನರು ದೇವಾಲಯಕ್ಕೆ ತೆಗೆದು
ಕೊಂಡು ಬಂದು ಕೊಟ್ಟ ಹಣವೇ ಇದು. [5]ನಂತರ
ಯಾಜಕರು ದೇವಾಲಯದಲ್ಲಿ ಕೆಲಸದ ಉಸ್ತು
ವಾರಿಯನ್ನು ನೋಡಿಕೊಳ್ಳುವ ಮುಖ್ಯಸ್ತರಿಗೆ ಕೊಡಲಿ.
ಯಾಜಕರು ದೇವಾಲಯವನ್ನು ದುರಸ್ತಿ ಮಾಡುವ
ಕೆಲಸಗಾರರಿಗೆ ಈ ಹಣವನ್ನು ವಿನಿಯೋಗಿಸಲಿ. [6]ಅಲ್ಲಿ
ಬಡಗಿಗಳು, ಶಿಲ್ಪಿಗಳು ಮತ್ತು ಕಲ್ಲುಕುಟಿಕರಿದ್ದಾರೆ.
ಮರವನ್ನು ಕೊಳ್ಳಲು ಮತ್ತು ಕಲ್ಲುಗಳನ್ನು ಕೆತ್ತಿಸಲು ಈ
ಹಣವನ್ನು ಬಳಸಿ. [7]ನೀವು ಕೆಲಸಗಾರರಿಗೆ ಕೊಡುವ
ಹಣವನ್ನು ಲೆಕ್ಕಹಾಕಬೇಡಿ. ಯಾಕೆಂದರೆ ಆ ಕೆಲಸ
ಗಾರರು ನಂಬಿಗಸ್ತರಾಗಿದ್ದಾರೆ'' ಎಂದು ಹೇಳಿದನು.

### ದೇವಾಲಯದಲ್ಲಿ ಧರ್ಮಶಾಸ್ತ್ರವು ಸಿಕ್ಕಿತು

[8]ಪ್ರಧಾನಯಾಜಕನಾದ ಹಿಲ್ಕೀಯನು ಕಾರ್ಯದರ್ಶಿ
ಯಾದ ಶಾಫಾನನಿಗೆ, ''ದೇವಾಲಯದಲ್ಲಿ ನನಗೆ ಧರ್ಮ
ಶಾಸ್ತ್ರವು ಸಿಕ್ಕಿತು'' ಎಂದು ಹೇಳಿದನು. ಹಿಲ್ಕೀಯನು
ಅದನ್ನು ಶಾಫಾನನಿಗೆ ನೀಡಿದನು. ಶಾಫಾನನು ಅದನ್ನು
ಓದಿದನು.

9ಕಾರ್ಯದರ್ಶಿಯಾದ ಶಾಫಾನನು ರಾಜನಾದ
ಯೋಷೀಯನ ಬಳಿಗೆ ಬಂದು ಅವನಿಗೆ, ‘‘ನಿನ್ನ ಸೇವಕರು
ದೇವಾಲಯದಲ್ಲಿದ್ದ ಹಣವನ್ನು ವ್ಯಯಮಾಡಿದರು.
ಅವರು ಆ ಹಣವನ್ನು ದೇವಾಲಯದಲ್ಲಿ ಕೆಲಸ ಮಾಡಿ
ಸುವ ಮೊಕ್ತೇಸರರಿಗೆ ಒಪ್ಪಿಸಿದರು’’ ಎಂದು ಹೇಳಿದನು.
10ನಂತರ ಕಾರ್ಯದರ್ಶಿಯಾದ ಶಾಫಾನನು ರಾಜನಿಗೆ,
‘‘ಯಾಜಕನಾದ ಹಿಲ್ಕೀಯನು ನನಗೆ ಒಂದು ಗ್ರಂಥವನ್ನು
ಕೊಟ್ಟನು’’ಎಂದು ಹೇಳಿದನು. ಶಾಫಾನನು ರಾಜನಿಗೆ ಆ
ಗ್ರಂಥವನ್ನು ಓದಿದನು.

11ರಾಜನು ಧರ್ಮಶಾಸ್ತ್ರದ ವಾಕ್ಯಗಳನ್ನು ಕೇಳಿದಾಗ,
ಗಲಿಬಿಲಿಗೊಂಡು ತನ್ನ ಬಟ್ಟೆಗಳನ್ನು ಹರಿದುಕೊಂಡನು.
12ಅನಂತರ ರಾಜನು ಯಾಜಕನಾದ ಹಿಲ್ಕೀಯನಿಗೆ,
ಶಾಫಾನನ ಮಗನಾದ ಅಹೀಕಾಮನಿಗೆ, ಮೀಕಾಯನ
ಮಗನಾದ ಅಕ್ಬೋರನಿಗೆ, ಕಾರ್ಯದರ್ಶಿಯಾದ
ಶಾಫಾನನಿಗೆ ಮತ್ತು ರಾಜಸೇವಕನಾದ ಅಸಾಯನಿಗೆ
ಒಂದು ಆಜ್ಞೆಯನ್ನು ನೀಡಿದನು. 13ರಾಜನಾದ ಯೋಷೀ
ಯನು, ‘‘ಈಗ ನಾವು ಏನು ಮಾಡಬೇಕೆಂದು ಯೆಹೋ
ವನನ್ನು ಕೇಳಿ. ನನಗಾಗಿ, ಜನರಿಗಾಗಿ ಮತ್ತು ಎಲ್ಲಾ
ಯೆಹೂದಕ್ಕಾಗಿ ಯೆಹೋವನನ್ನು ಕೇಳಿ. ಈಗ ಸಿಕ್ಕಿರುವ
ಈ ಗಂಥದ ವಾಕ್ಯಗಳನ್ನು ಕುರಿತಾಗಿಯೂ ಕೇಳಿ.
ಯಹೋವನು ನಮ್ಮ ಮೇಲೆ ಕೋಪಗೊಂಡಿದ್ದಾನೆ.
ಏಕೆಂದರೆ ನಮ್ಮ ಪೂರ್ವಿಕರು ಈ ಗ್ರಂಥದ ವಾಕ್ಯಗಳಿಗೆ
ಕಿವಿಗೊಡಲಿಲ್ಲ; ಅವುಗಳನ್ನು ಕೈಕೊಂಡು ನಡೆಯಲಿಲ್ಲ’’
ಎಂದು ಹೇಳಿದನು.

## ಯೋಷೀಯನು ತನ್ನ ಜನರನ್ನು ಪ್ರವಾದಿಯಾದ ಹುಲ್ದಳ ಬಳಿಗೆ ಕಳುಹಿಸಿದನು

14ಆದ್ದರಿಂದ ಯಾಜಕನಾದ ಹಿಲ್ಕೀಯ, ಅಹೀ
ಕಾಮ್, ಅಕ್ಬೋರ್, ಶಾಫಾನ್ ಮತ್ತು ಅಸಾಯ ಎಂಬ
ವರು ಪ್ರವಾದಿನಿಯಾದ ಹುಲ್ದಳ ಬಳಿಗೆ ಹೋದರು.
ಹುಲ್ದಳು ಹರ್ಹಸನ ಮೊಮ್ಮಗನೂ ತಿಕ್ವನ ಮಗನೂ ಆದ
ಶಲ್ಲೂಮನ ಹೆಂಡತಿ. ಅವನು ಯಾಜಕರ ವಸ್ತ್ರಗಳಿಗೆ
ಮೇಲ್ವಿಚಾರಕನಾಗಿದ್ದನು. ಹುಲ್ದಳು ಜೆರುಸಲೇಮಿನ
ಎರಡನೆಯ ಭಾಗದಲ್ಲಿ* ವಾಸಿಸುತ್ತಿದ್ದಳು. ಅವರು
ಹೋಗಿ ಹುಲ್ದಳ ಜೊತೆಯಲ್ಲಿ ಮಾತನಾಡಿದರು.

15ಆಗ ಹುಲ್ದಳು ಅವರಿಗೆ, ‘‘ನಿಮ್ಮನ್ನು ನನ್ನ ಬಳಿಗೆ
ಕಳುಹಿಸಿದವನ ಬಳಿಗೆ ಹೋಗಿ 16ಇಸ್ರೇಲಿನ ದೇವರಾದ
ಯೆಹೋವನು ಇಂತೆನ್ನುತ್ತಾನೆ: ‘ಈ ದೇಶದ ಮೇಲೆ
ಮತ್ತು ಇಲ್ಲಿ ವಾಸಮಾಡುತ್ತಿರುವ ಜನರ ಮೇಲೆ ನಾನು
ಕೇಡುಗಳನ್ನು ಬರಮಾಡುವೆನು. ಯೆಹೂದದ ರಾಜನು
ಓದಿದ ಗ್ರಂಥದಲ್ಲಿ ಈ ಕೇಡುಗಳನ್ನು ತಿಳಿಸಲಾಗಿದೆ.
17ಯೆಹೂದದ ರಾಜರು ನನ್ನನ್ನು ತ್ಯಜಿಸಿದರು ಮತ್ತು
ಇತರ ದೇವರುಗಳಿಗೆ ಧೂಪವನ್ನು ಸುಟ್ಟರು. ಅವರು
ನನ್ನಲ್ಲಿ ಹೆಚ್ಚು ಕೋಪವನ್ನು ಉಂಟುಮಾಡಿದರು. ಅವರು
ಅನೇಕ ವಿಗ್ರಹಗಳನ್ನು ನಿರ್ಮಿಸಿದರು. ಆದಕಾರಣವೇ
ನಾನು ನನ್ನ ಕೋಪವನ್ನು ಈ ಸ್ಥಳದ ವಿರುದ್ಧ ತೋರ್ಪ
ಡಿಸುತ್ತೇನೆ. ನನ್ನ ಕೋಪವು ಆರಿಹೋಗದ ಬೆಂಕಿ
ಯಂತಿರುತ್ತದೆ!’
18-19‘‘ಯೆಹೂದದ ರಾಜನಾದ ಯೋಷೀಯನು
ಯೆಹೋವನ ಸಲಹೆಯನ್ನು ಕೇಳಲು ನಿಮ್ಮನ್ನು ಕಳುಹಿ
ಸಿದನು. ಯೋಷೀಯನಿಗೆ ಈ ಸಂಗತಿಗಳನ್ನು ಹೇಳಿ:
‘ನೀನು ಕೇಳುವ ಈ ಮಾತುಗಳನ್ನು ಇಸ್ರೇಲರ ದೇವರಾದ
ಯೆಹೋವನು ಹೇಳಿದನು. ಈ ದೇಶವನ್ನು ಮತ್ತು ಇಲ್ಲಿ
ವಾಸಿಸುವ ಜನರನ್ನು ಕುರಿತು ನಾನು ಹೇಳಿದ ಸಂಗತಿ
ಗಳನ್ನು ನೀನು ಕೇಳಿರುವೆ. ನಿನ್ನ ಹೃದಯವು ಮೃದು
ವಾಗಿರುವುದರಿಂದ, ನೀನು ಅವುಗಳನ್ನು ಕೇಳಿದಾಗ
ದೈನ್ಯತೆಯುಳ್ಳವನಾದೆ. ಈ ಸ್ಥಳಕ್ಕೆ (ಜೆರುಸಲೇಮಿಗೆ) ಆ
ಭೀಕರ ಸಂಗತಿಗಳಾಗುತ್ತವೆಯೆಂದು ನಾನು ಹೇಳಿದೆ. ಆಗ
ನೀನು ದುಃಖದಿಂದ ನಿನ್ನ ಬಟ್ಟೆಗಳನ್ನು ಹರಿದುಕೊಂಡು
ಅಳಲಾರಂಭಿಸಿದೆ. ಆದಕಾರಣವೇ ನಾನು ನಿನಗೆ
ಕಿವಿಗೊಟ್ಟೆನು.’ ಯೆಹೋವನು ಹೇಳುವುದೇನಂದರೆ:
20‘ನೀನು ನಿನ್ನ ಪೂರ್ವಿಕರ ಜೊತೆ ಸೇರುವಂತೆ ನಾನು
ಮಾಡುತ್ತೇನೆ. ನೀನು ಶಾಂತಿಯಿಂದ ಸತ್ತು ನಿನ್ನ ಸಮಾಧಿ
ಯನ್ನು ಸೇರುವೆ. ಈ ದೇಶದ (ಜೆರುಸಲೇಮಿನ) ಮೇಲೆ
ನಾನು ತರಲಿರುವ ಕೇಡುಗಳನ್ನು ನಿನ್ನ ಕಣ್ಣುಗಳು
ನೋಡುವುದಿಲ್ಲ’ ಎಂಬುದೇ’’ ಎಂದು ಹೇಳಿದಳು.
ನಂತರ ಯಾಜಕನಾದ ಹಿಲ್ಕೀಯ, ಅಹೀಕಾಮ್,
ಅಕ್ಬೋರ್, ಶಾಫಾನ್ ಮತ್ತು ಅಸಾಯ ಹಿಂತಿರುಗಿ
ಬಂದು ರಾಜನಿಗೆ ತಿಳಿಸಿದರು.

## ಜನರು ಧರ್ಮಶಾಸ್ತ್ರವನ್ನು ಕೇಳುವರು

23 ಯೆಹೂದದ ಮತ್ತು ಜೆರುಸಲೇಮಿನ ನಾಯಕ
ರೆಲ್ಲರೂ ಬಂದು ತನ್ನನ್ನು ಭೇಟಿಯಾಗ
ಬೇಕೆಂದು ರಾಜನಾದ ಯೋಷೀಯನು ಹೇಳಿದನು.
2ನಂತರ ರಾಜನು ದೇವಾಲಯಕ್ಕೆ ಹೋದನು. ಯೆಹೂ
ದದ ಜನರೆಲ್ಲರು ಮತ್ತು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದ
ಜನರೆಲ್ಲರು ಅವನ ಜೊತೆಯಲ್ಲಿ ಹೋದರು. ಯಾಜ
ಕರು, ಪ್ರವಾದಿಗಳು, ಚಿಕ್ಕವರು ಮತ್ತು ದೊಡ್ಡವರು
ಅವನೊಡನೆ ಹೋದರು. ಆಗ ಅವನು ನಿಬಂಧನ
ಗ್ರಂಥವನ್ನು ಓದಿದನು. ಇದು ದೇವಾಲಯದಲ್ಲಿ ಸಿಕ್ಕಿದ
ಗ್ರಂಥವಾಗಿತ್ತು. ಜನರೆಲ್ಲರಿಗೂ ಕೇಳಿಸುವಂತೆ ಯೋಷೀ
ಯನು ಗ್ರಂಥವನ್ನು ಓದಿದನು.

3ರಾಜನು ಸ್ತಂಭದ ಬಳಿ ನಿಂತು ತಾನು ಯೆಹೋವನ
ಮಾರ್ಗದಲ್ಲಿ ನಡೆಯುವುದಾಗಿಯೂ ಆತನ ಆಜ್ಞೆಗಳಿಗೆ,

---

**ಎರಡನೆಯ ಭಾಗ** ಜೆರುಸಲೇಮನ್ನು ನಾಲ್ಕು ಭಾಗಗಳನ್ನಾಗಿ ವಿಂಗಡಿಸ
ಲಾಗಿತ್ತು.

ಒಡಂಬಡಿಕೆಗೆ ಮತ್ತು ಆತನ ನಿಯಮಗಳಿಗೆ ಪೂರ್ಣ
ಹೃದಯದಿಂದಲೂ ಪೂರ್ಣಆತ್ಮದಿಂದಲೂ ವಿಧೇಯ
ನಾಗಿರುವುದಾಗಿಯೂ ನಿಬಂಧನ ಗ್ರಂಥದಲ್ಲಿ ಬರೆದಿ
ರುವ ಎಲ್ಲಾ ವಾಕ್ಯಗಳನ್ನು ನೇರವೇರಿಸುವುದಾಗಿಯೂ
ಯೆಹೋವನಿಗೆ ಪ್ರಮಾಣಮಾಡಿದನು. ರಾಜನ ಪ್ರಮಾ
ಣಕ್ಕೆ ಬೆಂಬಲ ನೀಡಲು ಜನರೆಲ್ಲರೂ ಎದ್ದು ನಿಂತರು.

4ನಂತರ ರಾಜನು ಪ್ರಧಾನಯಾಜಕನಾದ ಹಿಲ್ಕೀಯ
ನಿಗೆ, ಇತರ ಯಾಜಕರಿಗೆ, ದ್ವಾರಪಾಲಕರಿಗೆ, ಬಾಳ್
ದೇವರಿಗೂ ಅಶೇರ ದೇವತೆಗೂ ಮತ್ತು ಆಕಾಶದ
ನಕ್ಷತ್ರಗಳಿಗೂ ಉಪಯೋಗಿಸುತ್ತಿದ್ದ ಎಲ್ಲಾ ಸಲಕರಣೆ
ಗಳನ್ನು ದೇವಾಲಯದಿಂದ ಹೊರತರುವಂತೆ ಆಜ್ಞಾಪಿ
ಸಿದನು. ಯೋಷೀಯನು ಜೆರುಸಲೇಮಿನ ಹೊರಗೆ
ಕಿದ್ರೋನ್ ಹೊಲಗಳಲ್ಲಿ ಅವುಗಳನ್ನು ಸುಟ್ಟುಹಾಕಿದನು.
ಅವರು ಬೂದಿಯನ್ನು ಬೇತೇಲಿಗೆ ತೆಗೆದುಕೊಂಡು
ಹೋದರು.

5ಯೆಹೂದದ ರಾಜರುಗಳು ಯಾಜಕರಾಗಿ ಸೇವೆ
ಮಾಡಲು ಕೆಲವು ಸಾಮಾನ್ಯ ಜನರನ್ನು ಆರಿಸಿಕೊಂಡರು.
ಈ ಜನರು ಆರೋನನ ಕುಲದಿಂದ ಬಂದವರಲ್ಲ! ಈ
ಸುಳ್ಳುಯಾಜಕರು ಯೆಹೂದದ ನಗರಗಳಲ್ಲಿನ ಮತ್ತು
ಜೆರುಸಲೇಮಿನ ಊರುಗಳಲ್ಲಿನ ಉನ್ನತಸ್ಥಳಗಳಲ್ಲಿ
ಧೂಪವನ್ನು ಸುಡುತ್ತಿದ್ದರು. ಅವರು ಬಾಳನನ್ನು,
ಸೂರ್ಯನನ್ನು, ಚಂದ್ರನನ್ನು, ಆಕಾಶ ಸೈನ್ಯವಾದ ನಕ್ಷತ್ರ
ಗಳನ್ನು ಗೌರವಿಸಲು ಧೂಪವನ್ನು ಸುಡುತ್ತಿದ್ದರು. ಆದರೆ
ಯೋಷೀಯನು ಆ ಸುಳ್ಳು ಯಾಜಕರನ್ನು ನಿಲ್ಲಿಸಿದನು.

6ಯೋಷೀಯನು ಅಶೇರಸ್ತಂಭವನ್ನು ದೇವಾಲಯ
ದಿಂದ ತೆಗೆದುಹಾಕಿದನು. ಅವನು ಅಶೇರಸ್ತಂಭವನ್ನು
ನಗರದ ಹೊರವಲಯದ ಕಿದ್ರೋನ್ ಕಣಿವೆಗೆ ತೆಗೆದು
ಕೊಂಡು ಹೋಗಿ ಅದನ್ನು ಅಲ್ಲಿ ಸುಟ್ಟಹಾಕಿದನು. ನಂತರ
ಅವನು ಅದನ್ನು ಪುಡಿಪುಡಿ ಮಾಡಿಸಿ ಧೂಳಿನಲ್ಲಿ ಬೆರಸಿ
ಸಾಮಾನ್ಯ ಜನರ ಸ್ಮಶಾನದಲ್ಲಿ ಆ ಧೂಳನ್ನು ಚೆಲ್ಲಿದನು.

7ನಂತರ ರಾಜನಾದ ಯೋಷೀಯನು ದೇವಾಲಯ
ದಲ್ಲಿದ್ದ ದೇವದಾಸ ದೇವದಾಸಿಯರ ಮನೆಗಳನ್ನು ಕೆಡವಿ
ಹಾಕಿಸಿದನು. ಆ ಮನೆಗಳಲ್ಲಿ ಸುಳ್ಳುದೇವತೆಯಾದ
ಅಶೇರಳಿಗೋಸ್ಕರ ಚಿಕ್ಕ ಗುಡಾರಗಳನ್ನು ನೇಯುತ್ತಿ
ದ್ದರು.
8-9ಆ ಸಮಯದಲ್ಲಿ ಯಾಜಕರು ಯಜ್ಞಗಳನ್ನು
ಜೆರುಸಲೇಮಿಗೆ ತರಲಿಲ್ಲ ಮತ್ತು ದೇವಾಲಯದಲ್ಲಿನ
ಯಜ್ಞವೇದಿಕೆಯ ಮೇಲೆ ಅವುಗಳನ್ನು ಅರ್ಪಿಸಲಿಲ್ಲ.
ಯಾಜಕರು ಯೆಹೂದದ ಎಲ್ಲಾ ನಗರಗಳಲ್ಲಿಯೂ
ವಾಸಿಸುತ್ತಿದ್ದರು. ಅವರು ಆ ನಗರಗಳಲ್ಲಿನ ಉನ್ನತ
ಸ್ಥಳಗಳಲ್ಲಿ ಧೂಪವನ್ನು ಸುಡುತ್ತಿದ್ದರು ಮತ್ತು ಯಜ್ಞ
ಗಳನ್ನು ಅರ್ಪಿಸುತ್ತಿದ್ದರು. ಆ ಉನ್ನತಸ್ಥಳಗಳು ಗೆಬದಿಂದ
ಬೇರ್ಷೆಬದವರೆಗೆ ಎಲ್ಲಾ ಕಡೆಗಳಲ್ಲಿದ್ದವು. ಯಾಜಕರು
ತಮ್ಮ ಹುಳಿಯಿಲ್ಲದ ರೊಟ್ಟಿಗಳನ್ನು ಜೆರುಸಲೇಮಿನ
ದೇವಾಲಯದಲ್ಲಿ ಯಾಜಕರಾಗಿದ್ದ ವಿಶೇಷ ಸ್ಥಳಗಳಲ್ಲಿ
ತಿನ್ನದೆ ಆ ಊರುಗಳಲ್ಲಿ ಸಾಮಾನ್ಯ ಜನರೊಂದಿಗೆ ತಿನ್ನುತ್ತಿ
ದ್ದರು. ಆದರೆ ರಾಜನಾದ ಯೋಷೀಯನು ಆ ಉನ್ನತ
ಸ್ಥಳಗಳನ್ನು ನಾಶಗೊಳಿಸಿ ಆ ಯಾಜಕರನ್ನು ಜೆರುಸ
ಲೇಮಿಗೆ ಕರೆತಂದನು. ಯೆಹೋಶುವನ ದ್ವಾರದ ಎಡ
ಗಡೆಯಲ್ಲಿದ್ದ ಉನ್ನತಸ್ಥಳಗಳನ್ನು ಯೋಷೀಯನು ನಾಶ
ಗೊಳಿಸಿದನು. (ಯೆಹೋಶುವನು ನಗರಾಧಿಕಾರಿ
ಯಾಗಿದ್ದನು.)

10ತೋಫೆತ್ ಎನ್ನುವುದು ಬೆನ್‌ಹಿನ್ನೋಮ್‌ನ
ಮಗನಿಗೆ ಸೇರಿದ ಒಂದು ಕಣಿವೆ. ಅಲ್ಲಿ ಸುಳ್ಳುದೇವರಾದ
ಮೋಲೆಕನ ಗೌರವಾರ್ಥವಾಗಿ ಜನರು ತಮ್ಮ ಮಕ್ಕಳನ್ನು
ಆಹುತಿ ಕೊಡುತ್ತಿದ್ದರು ಮತ್ತು ಯಜ್ಞವೇದಿಕೆಯ ಮೇಲೆ
ಸುಡುತ್ತಿದ್ದರು. ಯೋಷೀಯನು, ಜನರು ಮತ್ತೆ ಆ
ಸ್ಥಳವನ್ನು ಉಪಯೋಗಿಸದಂತೆ ನಾಶಗೊಳಿಸಿದನು.
11ಪೂರ್ವಕಾಲದಲ್ಲಿ ಯೆಹೂದದ ರಾಜರುಗಳು
ದೇವಾಲಯದ ಬಾಗಿಲಿನ ಹತ್ತಿರ ಕೆಲವು ಕುದುರೆಗಳನ್ನು
ಮತ್ತು ರಥಗಳನ್ನು ನಿಲ್ಲಿಸುತ್ತಿದ್ದರು. ಇದು ನಾತಾನ್
ಮೆಲೆಕನೆಂಬ ಮುಖ್ಯ ಅಧಿಕಾರಿಯ ಕೋಣೆಯ ಹತ್ತಿರ
ದಲ್ಲಿತ್ತು. ಆ ಕುದುರೆಗಳು ಮತ್ತು ರಥಗಳು ಸೂರ್ಯ
ದೇವತೆಯನ್ನು ಗೌರವಿಸಬೇಕಾಗಿತ್ತು. ಯೋಷೀಯನು
ಕುದುರೆಗಳನ್ನು ತೆಗೆಸಿ ರಥಗಳನ್ನು ಸುಡಿಸಿಬಿಟ್ಟನು.

12ಪೂರ್ವಕಾಲದಲ್ಲಿ, ಯೆಹೂದದ ರಾಜರುಗಳು
ಅಹಾಬನ ಕಟ್ಟಡದ ಮಾಳಿಗೆಯ ಮೇಲೆ ಯಜ್ಞ
ವೇದಿಕೆಗಳನ್ನು ನಿರ್ಮಿಸಿದ್ದರು. ರಾಜನಾದ ಮನಸ್ಸೆಯು
ದೇವಾಲಯದ ಎರಡು ಪ್ರಾಕಾರಗಳಲ್ಲಿ ಯಜ್ಞವೇದಿಕೆ
ಗಳನ್ನು ನಿರ್ಮಿಸಿದ್ದನು. ಯೋಷೀಯನು ಆ ಯಜ್ಞ
ವೇದಿಕೆಗಳನ್ನೆಲ್ಲ ನಾಶಗೊಳಿಸಿ, ಅವುಗಳ ಚೂರುಗಳನ್ನು
ಕಿದ್ರೋನ್ ಕಣಿವೆಗೆ ಎಸೆದನು.

13ಪೂರ್ವಕಾಲದಲ್ಲಿ, ರಾಜನಾದ ಸೊಲೊಮೋನನು
ಜೆರುಸಲೇಮಿನ ಬಳಿಯಲ್ಲಿದ್ದ ವಿಘ್ನಪರ್ವತದ ಮೇಲೆ
ಕೆಲವು ಉನ್ನತಸ್ಥಳಗಳನ್ನು ನಿರ್ಮಿಸಿದ್ದನು. ಆ ಉನ್ನತ
ಸ್ಥಳಗಳು ಪರ್ವತದ ದಕ್ಷಿಣದಿಕ್ಕಿನ ಮೇಲಿದ್ದವು. ರಾಜ
ನಾದ ಸೊಲೊಮೋನನು ಚೀದೋನ್ಯರ ಅಷ್ಟೋರೆತ್,
ಮೋವಾಬ್ಯರ ಕೆಮೋಷ್, ಅಮ್ಮೋನಿಯರ
ಮಿಲ್ಕೋಮ್ ಎಂಬ ಅಸಹ್ಯ ವಿಗ್ರಹಗಳಿಗಾಗಿ ಆ ಉನ್ನತ
ಸ್ಥಳಗಳನ್ನು ನಿರ್ಮಿಸಿದ್ದನು. ಆದರೆ ರಾಜನಾದ ಯೋಷೀ
ಯನು ಆ ಪೂಜಾಸ್ಥಳಗಳನ್ನೆಲ್ಲಾ ನಾಶಪಡಿಸಿದನು.
14ರಾಜನಾದ ಯೋಷೀಯನು ಎಲ್ಲಾ ಸ್ಮಾರಕಕಲ್ಲು
ಗಳನ್ನು ಮತ್ತು ಅಶೇರಸ್ತಂಭಗಳನ್ನು ಒಡೆದು ಹಾಕಿ
ಸಿದನು. ಆಮೇಲೆ ಅವನು ಆ ಸ್ಥಳದ ಮೇಲೆ ಸತ್ತವರ
ಎಲುಬುಗಳನ್ನು ಹರಡಿದನು.

15ಯೋಷೀಯನು ಬೇತೇಲಿನ ಉನ್ನತಸ್ಥಳವನ್ನು
ಮತ್ತು ಯಜ್ಞವೇದಿಕೆಯನ್ನು ಕೆಡವಿಬಿಟ್ಟನು. ನೆಬಾಟನ

ಮಗನಾದ ಯಾರೊಬ್ಬಾಮನು ಈ ಯಜ್ಞವೇದಿಕೆಯನ್ನು
ನಿರ್ಮಿಸಿದ್ದನು. ಇಸ್ರೇಲರು ಪಾಪ ಮಾಡುವಂತೆ
ಯಾರೊಬ್ಬಾಮನು ಪ್ರೇರೇಪಿಸಿದ್ದನು. ಯೋಷೀಯನು
ಯಜ್ಞವೇದಿಕೆಯನ್ನು ಮತ್ತು ಉನ್ನತಸ್ಥಳವನ್ನು ಕೆಡವಿ
ಬಿಟ್ಟನು. ಯೋಷೀಯನು ಯಜ್ಞವೇದಿಕೆಯ ಕಲ್ಲುಗ
ಳನ್ನು ಪುಡಿಪುಡಿಮಾಡಿ ಧೂಳಿನಲ್ಲಿ ಬೆರಸಿದನು. ಅವನು
ಅಶೇರಸ್ತಂಭವನ್ನು ಸುಟ್ಟುಹಾಕಿದನು.

16ಯೋಷೀಯನು ಸುತ್ತಲೂ ನೋಡಿದಾಗ ಬೆಟ್ಟದ
ಮೇಲಿದ್ದ ಸ್ಮಶಾನಗಳನ್ನು ಕಂಡನು. ಅವನು ಜನರನ್ನು
ಕಳುಹಿಸಿ ಆ ಸ್ಮಶಾನಗಳಿಂದ ಎಲುಬುಗಳನ್ನು ತರಿಸಿ ಆ
ಎಲುಬುಗಳನ್ನು ಯಜ್ಞವೇದಿಕೆಯ ಮೇಲೆ ಸುಟ್ಟನು. ಈ
ರೀತಿಯಲ್ಲಿ, ಯೋಷೀಯನು ಯಜ್ಞವೇದಿಕೆಯನ್ನು
ಹೊಲಸು ಮಾಡಿದನು. ಇದು ಪ್ರವಾದಿಯು ಘೋಷಿ
ಸಿದ್ದ* ಯೆಹೋವನ ಸಂದೇಶದಂತೆ ಸಂಭವಿಸಿತು.
ಯಾರೊಬ್ಬಾಮನು ಯಜ್ಞವೇದಿಕೆಯ ಪಕ್ಕದಲ್ಲಿ
ನಿಂತಿದ್ದಾಗ ಪ್ರವಾದಿಯು ಈ ಸಂಗತಿಗಳನ್ನು
ಪ್ರಕಟಿಸಿದ್ದನು.

ನಂತರ ಯೋಷೀಯನು ಸುತ್ತಲೂ ನೋಡಿದಾಗ,
ದೇವಮನುಷ್ಯನ ಸಮಾಧಿಯನ್ನು ಕಂಡನು.

17ಯೋಷೀಯನು, ‘‘ನಾನು ನೋಡುತ್ತಿರುವ ಆ
ಸ್ಮಾರಕ ಯಾವುದು?’’ ಎಂದು ಕೇಳಿದನು.

ಆ ನಗರದ ಜನರು ಅವನಿಗೆ, ‘‘ಅದು ಯೆಹೂದದಿಂದ
ಬಂದ ದೇವಮನುಷ್ಯನ ಸಮಾಧಿ. ನೀನು ಬೇತೇಲಿನ
ಯಜ್ಞವೇದಿಕೆಗೆ ಮಾಡಿದ ಕಾರ್ಯಗಳನ್ನು ಕುರಿತು ಈ
ಪ್ರವಾದಿಯು ಬಹಳ ಕಾಲದ ಹಿಂದೆಯೇ ಹೇಳಿದ್ದನು’’
ಎಂದರು. 18ಯೋಷೀಯನು, ‘‘ಆ ಸಮಾಧಿಗೆ ಏನೂ
ಮಾಡಬೇಡಿ. ಅವನ ಎಲುಬುಗಳನ್ನು ತೆಗೆಯಬೇಡಿ’’
ಎಂದು ಹೇಳಿದನು.

19ಯೋಷೀಯನು ಸಮಾರ್ಯದ ನಗರಗಳಲ್ಲಿದ್ದ
ಉನ್ನತಸ್ಥಳಗಳ ಆಲಯಗಳನ್ನೆಲ್ಲ ನಾಶಗೊಳಿಸಿದನು.
ಇಸ್ರೇಲಿನ ರಾಜರುಗಳು ಈ ಆಲಯಗಳನ್ನು ನಿರ್ಮಿಸಿ
ದ್ದರು. ಇದರಿಂದ ಯೆಹೋವನು ಬಹಳ ಕೋಪ
ಗೊಂಡಿದ್ದನು. ಯೋಷೀಯನು ಬೇತೇಲಿನಲ್ಲಿ ಆರಾಧ
ನೆಯ ಸ್ಥಳಗಳನ್ನು ನಾಶಪಡಿಸಿದಂತೆ ಆ ಆಲಯಗಳನ್ನೂ
ನಾಶಗೊಳಿಸಿದನು.

20ಯೋಷೀಯನು ಸಮಾರ್ಯದ ಉನ್ನತಸ್ಥಳಗಳಲ್ಲಿದ್ದ
ಯಾಜಕರನ್ನೆಲ್ಲ ಕೊಂದುಹಾಕಿದನು. ಅವನು ಯಾಜಕ
ರನ್ನು ಯಜ್ಞವೇದಿಕೆಗಳ ಮೇಲೆಯೇ ಕೊಂದು ಹಾಕಿ
ದನು. ಅವನು ಜನರ ಎಲುಬುಗಳನ್ನು ಯಜ್ಞವೇದಿಕೆಯ
ಮೇಲೆ ಸುಟ್ಟನು. ಈ ರೀತಿ ಅವನು ಪೂಜೆಯ ಸ್ಥಳಗಳನ್ನು
ನಾಶಗೊಳಿಸಿದನು. ನಂತರ ಅವನು ಜೆರುಸಲೇಮಿಗೆ
ಹಿಂದಿರುಗಿದನು.

## ಯೆಹೂದದ ಜನರು ಪಸ್ಕಹಬ್ಬವನ್ನು ಆಚರಿಸಿದರು

21ರಾಜನಾದ ಯೋಷೀಯನು ಜನರಿಗೆಲ್ಲ, ‘‘ನಿಮ್ಮ
ದೇವರಾದ ಯೆಹೋವನಿಗಾಗಿ ಪಸ್ಕಹಬ್ಬವನ್ನು ಆಚರಿ
ಸಿರಿ. ಈ ನಿಬಂಧನ ಗ್ರಂಥದಲ್ಲಿ ಬರೆದಿರುವಂತೆಯೇ
ಅದನ್ನು ಮಾಡಿ’’ ಎಂದು ಆಜ್ಞಾಪಿಸಿದನು.

22ನ್ಯಾಯಾಧೀಶರು ಇಸ್ರೇಲನ್ನು ಆಳಿದ ದಿನಗಳಿಂದ
ಜನರು ಪಸ್ಕಹಬ್ಬವನ್ನು ಈ ರೀತಿಯಲ್ಲಿ ಆಚರಿಸಿರಲಿಲ್ಲ.
ಇಸ್ರೇಲಿನ ರಾಜರುಗಳಾಗಲೀ ಇಲ್ಲವೆ ಯೆಹೂದದ
ರಾಜರುಗಳಾಗಲೀ ಈ ರೀತಿ ಪಸ್ಕಹಬ್ಬವನ್ನು ವಿಜೃಂಭಣೆ
ಯಿಂದ ಆಚರಿಸಿರಲಿಲ್ಲ. 23ಯೋಷೀಯನು ರಾಜ
ನಾಗಿದ್ದ ಹದಿನೆಂಟನೆ ವರ್ಷದಲ್ಲಿ ಅವರು ಯೆಹೋ
ವನಿಗಾಗಿ ಈ ಪಸ್ಕಹಬ್ಬವನ್ನು ಜೆರುಸಲೇಮಿನಲ್ಲಿ
ಆಚರಿಸಿದರು.

24ಯೋಷೀಯನು ಮಾಂತ್ರಿಕರನ್ನು, ತಾಂತ್ರಿಕರನ್ನು,
ಮನೆಯ ದೇವರುಗಳನ್ನು, ವಿಗ್ರಹಗಳನ್ನು, ಯೆಹೂದ
ದಲ್ಲಿ ಮತ್ತು ಜೆರುಸಲೇಮಿನಲ್ಲಿ ಜನರು ಪೂಜಿಸುತ್ತಿದ್ದ
ತೆರಾಫೀಮ್ ಎಂಬ ಗೊಂಬೆಗಳನ್ನು ನಾಶಪಡಿಸಿದನು.
ಯಾಜಕನಾದ ಹಿಲ್ಕೀಯನಿಗೆ ದೇವಾಲಯದಲ್ಲಿ ಸಿಕ್ಕಿದ
ಧರ್ಮಶಾಸ್ತ್ರದಲ್ಲಿ ಬರೆದಿರುವ ನಿಯಮಗಳಿಗೆ ವಿಧೇಯ
ನಾಗಿರಲು ಯೋಷೀಯನು ಹೀಗೆ ಮಾಡಿದನು.

25ಇದಕ್ಕೆ ಮೊದಲು ಯೋಷೀಯನಂತಹ ರಾಜನು
ಇರಲೇ ಇಲ್ಲ. ಯೋಷೀಯನು ತನ್ನ ಪೂರ್ಣ ಹೃದಯ
ದಿಂದಲೂ ತನ್ನ ಪೂರ್ಣಆತ್ಮದಿಂದಲೂ ತನ್ನ ಪೂರ್ಣ
ಶಕ್ತಿಯಿಂದಲೂ ಯೆಹೋವನ ಕಡೆಗೆ ತಿರುಗಿದನು.
ಮೋಶೆಯ ಧರ್ಮಶಾಸ್ತ್ರವನ್ನು ಯೋಷೀಯನಂತೆ ಬೇರೆ
ಯಾವ ರಾಜನೂ ಅನುಸರಿಸಿರಲಿಲ್ಲ. ಆ ಕಾಲದವರೆಗೆ
ಯೋಷೀಯನಂತಹ ಮತ್ತೊಬ್ಬ ರಾಜನು ಇರಲೇ ಇಲ್ಲ.

26ಆದರೆ ಯೆಹೋವನು ಯೆಹೂದದ ಜನರ ಮೇಲೆ
ಕೋಪಗೊಳ್ಳುವುದನ್ನು ನಿಲ್ಲಿಸಲೇ ಇಲ್ಲ. ಮನಸ್ಸೆಯು
ಮಾಡಿದ ಕಾರ್ಯಗಳೆಲ್ಲವುಗಳಿಂದ ಯೆಹೋವನು
ಅವರ ಮೇಲೆ ಇನ್ನೂ ಕೋಪಗೊಂಡಿದ್ದನು. 27ಯೆಹೋ
ವನು,‘‘ನಾನು ಇಸ್ರೇಲರನ್ನು ತೆಗೆದುಹಾಕಿದಂತೆ ಯೆಹೂ
ದ್ಯರನ್ನೂ ನನ್ನ ಸನ್ನಿಧಿಯಿಂದ ತೆಗೆದುಹಾಕುವೆನು. ನಾನು
ಆರಿಸಿಕೊಂಡ ಜೆರುಸಲೇಮ್ ಪಟ್ಟಣವನ್ನೂ ನನ್ನ ನಾಮ
ಮಹತ್ತಿಗಾಗಿ ಸ್ವೀಕರಿಸಿಕೊಂಡ ದೇವಾಲಯವನ್ನೂ
ತಿರಸ್ಕರಿಸುವೆನು’’ ಎಂದು ಹೇಳಿದನು.

28‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ
ಪುಸ್ತಕದಲ್ಲಿ ಯೋಷೀಯನು ಮಾಡಿದ ಇತರ ಕಾರ್ಯ
ಗಳನ್ನೆಲ್ಲವನ್ನು ಕುರಿತು ಬರೆಯಲಾಗಿದೆ.

## ಯೋಷೀಯನ ಮರಣ

29ಯೋಷೀಯನ ಕಾಲದಲ್ಲಿ ಈಜಿಪ್ಟಿನ ರಾಜನಾದ
ಫರೋಹ-ನೆಕೋ ಎಂಬವನು ಅಶ್ಶೂರದ ರಾಜನ

---

**ಘೋಷಿಸಿದ್ದ** ನೋಡಿ 1 ರಾಜರುಗಳು 13:1-3.

ವಿರುದ್ಧವಾಗಿ ಹೋರಾಡಲು ಯೂಫ್ರೇಟೀಸ್ ನದಿಯ
ಬಳಿಗೆ ಹೋದನು. ರಾಜನಾದ ಯೋಷೀಯನು
ಫರೋಹ-ನೆಕೋವನ ವಿರುದ್ಧ ಹೋರಾಡಲು
ಯೂಫ್ರೇಟೀಸ್ ನದಿಯ ಬಳಿಗೆ ಹೋದನು. ಆದರೆ
ಮೆಗಿದ್ದೋವಿನಲ್ಲಿ ಫರೋಹ-ನೆಕೋವನು ಯೋಷೀ
ಯನನ್ನು ನೋಡಿ, ಅವನನ್ನು ಕೊಂದುಹಾಕಿದನು.
30 ಯೋಷೀಯನ ಸೇವಕರು ಮೆಗಿದ್ದೋವಿನಿಂದ ರಥ
ದಲ್ಲಿ ಯೋಷೀಯನ ದೇಹವನ್ನು ಜೆರುಸಲೇಮಿಗೆ
ತೆಗೆದುಕೊಂಡು ಬಂದರು. ಅವರು ಯೋಷೀಯನನ್ನು
ಅವನ ಸ್ವಂತ ಸ್ಮಶಾನದಲ್ಲಿ ಸಮಾಧಿಮಾಡಿದರು.

ನಂತರ ಸಾಮಾನ್ಯ ಜನರು ಯೋಷೀಯನ ಮಗನಾದ
ಯೆಹೋವಾಹಾಜನನ್ನು ಕರೆದು, ಅವನನ್ನು ಅಭಿಷೇಕಿಸಿ
ಹೊಸ ರಾಜನನ್ನಾಗಿ ಮಾಡಿದರು.

### ಯೆಹೋವಾಹಾಜನು ಯೆಹೂದದ ರಾಜನಾಗುವನು

31 ಯೆಹೋವಾಹಾಜನು ರಾಜನಾದಾಗ ಅವನಿಗೆ
ಇಪ್ಪತ್ತಮೂರು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಮೂರು ತಿಂಗಳು ಆಳಿದನು. ಅವನ
ತಾಯಿಯು ಲಿಬ್ನದ ಯೆರೆಮೀಯನ ಮಗಳಾದ ಹಮೂ
ಟಲ್ ಎಂಬ ಹೆಸರಿನವಳು. 32 ಯೆಹೋವಾಹಾಜನು
ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಮಾಡಿದನು. ಯೆಹೋವಾಹಾಜನು ತನ್ನ ಪೂರ್ವಿಕರೆ
ಲ್ಲರೂ ಮಾಡಿದಂತಹ ಕಾರ್ಯಗಳನ್ನು ಮಾಡಿದನು.
33 ಫರೋಹ-ನೆಕೋವನು ಹಮಾತ್ ದೇಶದ ರಿಬ್ಲಾ
ಎಂಬಲ್ಲಿ ಯೆಹೋವಾಹಾಜನನ್ನು ಸೆರೆಹಿಡಿದನು. ಆದ್ದ
ರಿಂದ ಯೆಹೋವಾಹಾಜನು ಜೆರುಸಲೇಮಿನಲ್ಲಿ ಆಳ
ಲಿಲ್ಲ. ಫರೋಹ-ನೆಕೋವನು ಮೂರು ಸಾವಿರದ
ನಾನೂರು ಕಿಲೋ. ಗ್ರಾಂ. ಬೆಳ್ಳಿಯನ್ನು ಮತ್ತು ಮೂವ
ತ್ನಾಲ್ಕು ಕಿಲೋ. ಗ್ರಾಂ. ಚಿನ್ನವನ್ನು ಕೊಡುವಂತೆ
ಯೆಹೂದದವರನ್ನು ಬಲವಂತಪಡಿಸಿದನು.

34 ಫರೋಹ ನೆಕೋವನು ಯೋಷೀಯನ ಮಗನಾದ
ಎಲ್ಯಾಕೀಮನನ್ನು ಹೊಸರಾಜನನ್ನಾಗಿ ಮಾಡಿ ಎಲ್ಯಾಕೀ
ಮನ ಹೆಸರನ್ನು ಯೆಹೋಯಾಕೀಮನೆಂದು ಬದಲಾಯಿ
ಸಿದನು. ಯೆಹೋವಾಹಾಜನನ್ನು ಫರೋಹ- ನೆಕೋ
ವನು ಈಜಿಪ್ಟಿಗೆ ಕರೆದೊಯ್ದನು. ಯೆಹೋವಾಹಾಜನು
ಈಜಿಪ್ಟಿನಲ್ಲಿ ಸತ್ತುಹೋದನು.

35 ಯೆಹೋಯಾಕೀಮನು ಫರೋಹ-ನೆಕೋವನಿಗೆ
ಬೆಳ್ಳಿಬಂಗಾರವನ್ನು ಕೊಟ್ಟನು; ಸಾಮಾನ್ಯ ಜನರಿಗೂ
ತೆರಿಗೆಗಳನ್ನು ಹಾಕಿ ಬಂದ ಹಣವನ್ನು ಫರೋಹ ನೆಕೋವ
ನಿಗೆ ಕೊಟ್ಟನು. ಆದ್ದರಿಂದ ಪ್ರತಿಯೊಬ್ಬರು ತಮ್ಮ ಪಾಲಿನ
ಬೆಳ್ಳಿಬಂಗಾರಗಳನ್ನು ಕೊಟ್ಟರು. ರಾಜನಾದ ಯೆಹೋ
ಯಾಕೀಮನು ಫರೋಹ-ನೆಕೋವನಿಗೆ ಅವುಗಳನ್ನು
ಕೊಟ್ಟನು.

36 ಯೆಹೋಯಾಕೀಮನು ರಾಜನಾದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿ
ನಲ್ಲಿ ಹನ್ನೊಂದು ವರ್ಷ ಆಳಿದನು. ಅವನ ತಾಯಿಯ
ಹೆಸರು ಜೆಬೂದಾ. ಆಕೆಯು ರೂಮದ ಪೆದಾಯನ
ಮಗಳು.

37 ಯೆಹೋಯಾಕೀಮನು ಯೆಹೋವನು ಕೆಟ್ಟ
ದ್ದೆಂದು ಹೇಳಿದವುಗಳನ್ನು ಮಾಡಿದನು. ಯೆಹೋಯಾ
ಕೀಮನು ತನ್ನ ಪೂರ್ವಿಕರು ಮಾಡಿದ ಕಾರ್ಯಗಳನ್ನು
ಮಾಡಿದನು.

### ರಾಜನಾದ ನೆಬೂಕದ್ನೆಚ್ಚರನು ಯೆಹೂದಕ್ಕೆ ಬರುವನು

24 ಯೆಹೋಯಾಕೀಮನ ಕಾಲದಲ್ಲಿ ಬಾಬಿಲೋ
ನಿನ ರಾಜನಾದ ನೆಬೂಕದ್ನೆಚ್ಚರನು ಯೆಹೂದ
ದೇಶಕ್ಕೆ ಬಂದನು. ಯೆಹೋಯಾಕೀಮನು ಮೂರು
ವರ್ಷಗಳವರೆಗೆ ನೆಬೂಕದ್ನೆಚ್ಚರನ ಸೇವೆಮಾಡಿದನು.
ನಂತರ ಯೆಹೋಯಾಕೀಮನು ನೆಬೂಕದ್ನೆಚ್ಚರನಿಗೆ
ವಿರುದ್ಧವಾಗಿ ದಂಗೆ ಎದ್ದು ಅವನ ಆಳ್ವಿಕೆಯಿಂದ ದೂರ
ವಾದನು. 2 ಯೆಹೋವನು ಬಾಬಿಲೋನಿನವರನ್ನು,
ಅರಾಮ್ಯರನ್ನು, ಮೋವಾಬ್ಯರನ್ನು ಮತ್ತು ಅಮ್ಮೋನಿಯ
ರನ್ನು ಯೆಹೋಯಾಕೀಮನ ವಿರುದ್ಧ ಹೋರಾಡಲು
ಕಳುಹಿಸಿದನು. ಯೆಹೋವನು ಯೆಹೂದವನ್ನು ನಾಶ
ಗೊಳಿಸಲು ಈ ಗುಂಪುಗಳನ್ನು ಕಳುಹಿಸಿದನು.
ಯೆಹೋವನು ತನ್ನ ಸೇವಕರಾದ ಪ್ರವಾದಿಗಳ ಮೂಲಕ
ತಿಳಿಸಿದ್ದಂತೆಯೇ ಇದು ಸಂಭವಿಸಿತು. 3 ಆತನು ಯೆಹೂದ್ಯ
ರನ್ನು ತನ್ನ ಸನ್ನಿಧಿಯಿಂದ ತೆಗೆದುಹಾಕ ಬೇಕೆಂದಿದ್ದ
ಕಾರಣ ಆತನ ಆಜ್ಞೆಯ ಪ್ರಕಾರ ಈ ಶಿಕ್ಷೆಯು ಅವರಿ
ಗಾಯಿತು.

4 ಜೆರುಸಲೇಮನ್ನು ನಿರಪರಾಧದ ರಕ್ತದಿಂದ
ತುಂಬಿಸಿದ ಮನಸ್ಸೆಯ ದುಷ್ಕೃತ್ಯಗಳನ್ನು ಯೆಹೋವನು
ಕ್ಷಮಿಸಲಿಲ್ಲ.

5 “ಯೆಹೂದದ ರಾಜರುಗಳ ಇತಿಹಾಸ” ಎಂಬ ಪುಸ್ತಕ
ದಲ್ಲಿ ಯೆಹೋಯಾಕೀಮನು ಮಾಡಿದ ಇತರ ಕಾರ್ಯ
ಗಳನ್ನು ಬರೆಯಲಾಗಿದೆ. 6 ಯೆಹೋಯಾಕೀಮನು ತೀರಿ
ಕೊಂಡಾಗ ಅವನನ್ನು ಅವನ ಪೂರ್ವಿಕರ ಜೊತೆಯಲ್ಲಿ
ಸಮಾಧಿಮಾಡಿದರು. ಯೆಹೋಯಾಕೀಮನ ಮಗನಾದ
ಯೆಹೋಯಾಖೀನನು ಅವನ ನಂತರ ಹೊಸ ರಾಜ
ನಾದನು.

7 ಈಜಿಪ್ಟಿನ ರಾಜನು ಈಜಿಪ್ಟನ್ನು ಬಿಟ್ಟು ಹೊರಗೆ
ಹೋಗಲಿಲ್ಲ. ಏಕೆಂದರೆ ಬಾಬಿಲೋನ್ ರಾಜನು,
ಈಜಿಪ್ಟಿನ ಹಳ್ಳದಿಂದ ಯೂಫ್ರೇಟೀಸ್ ನದಿಯವರೆಗಿನ
ದೇಶವನ್ನೆಲ್ಲಾ ಆಕ್ರಮಿಸಿಕೊಂಡಿದ್ದನು.

### ನೆಬೂಕದ್ನೆಚ್ಚರನು ಜೆರುಸಲೇಮನ್ನು ಆಕ್ರಮಿಸಿಕೊಂಡನು

8ಯೆಹೋಯಾಖೀನನು ಆಳಲಾರಂಭಿಸಿದಾಗ ಅವ
ನಿಗೆ ಹದಿನೆಂಟು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಮೂರು ತಿಂಗಳ ಕಾಲ ಆಳಿದನು. ಅವನ
ತಾಯಿಯು ಜೆರುಸಲೇಮಿನ ಎಲ್ನಾತಾನನ ಮಗಳಾದ
ನೆಹುಷ್ಟಾ ಎಂಬ ಹೆಸರಿನವಳು. 9ಯೆಹೋವನು ಕೆಟ್ಟ
ದ್ದೆಂದು ಹೇಳಿದ ಕಾರ್ಯಗಳನ್ನು ಯೆಹೋಯಾಖೀ
ನನು ಮಾಡಿದನು. ಅವನು ತನ್ನ ತಂದೆಯು ಮಾಡಿದಂತಹ
ಕಾರ್ಯಗಳನ್ನೆಲ್ಲ ಮಾಡಿದನು.

10ಆ ಸಮಯದಲ್ಲಿ ಬಾಬಿಲೋನ್ ರಾಜನಾದ
ನೆಬೂಕದ್ನೆಚ್ಚರನ ಅಧಿಕಾರಿಗಳು ಜೆರುಸಲೇಮಿಗೆ
ಮುತ್ತಿಗೆ ಹಾಕಿದರು. 11ಆಗ ಬಾಬಿಲೋನ್ ರಾಜನಾದ
ನೆಬೂಕದ್ನೆಚ್ಚರನು ಆ ನಗರಕ್ಕೆ ಬಂದನು. 12ಯೆಹೂದದ
ರಾಜನಾದ ಯೆಹೋಯಾಖೀನನು ಬಾಬಿಲೋನ್
ರಾಜನನ್ನು ಭೇಟಿ ಮಾಡಲು ಹೋದನು. ಯೆಹೋಯಾ
ಖೀನನ ತಾಯಿ, ಅವನ ಅಧಿಕಾರಿಗಳು, ನಾಯಕರು
ಮತ್ತು ಸಿಬ್ಬಂದಿಯೆಲ್ಲವೂ ಅವನೊಂದಿಗೆ ಹೋದರು.
ಆಗ ಬಾಬಿಲೋನ್ ರಾಜ ಯೆಹೋಯಾಖೀನನನ್ನು
ಸೆರೆಹಿಡಿದನು. ಇದು ಸಂಭವಿಸಿದ್ದು ನೆಬೂಕದ್ನೆಚ್ಚರನ
ಆಳ್ವಿಕೆಯ ಎಂಟನೆಯ ವರ್ಷದಲ್ಲಿ.

13ನೆಬೂಕದ್ನೆಚ್ಚರನು ಜೆರುಸಲೇಮಿನ ದೇವಾಲಯ
ದಲ್ಲಿದ್ದ ಭಂಡಾರವನ್ನೆಲ್ಲಾ ಮತ್ತು ರಾಜನ ಅರಮನೆ
ಯಲ್ಲಿದ್ದ ಭಂಡಾರವನ್ನೆಲ್ಲಾ ತೆಗೆದುಕೊಂಡು ಹೋದನು.
ಇಸ್ರೇಲರ ರಾಜನಾದ ಸೊಲೊಮೋನನು ದೇವಾಲಯ
ದಲ್ಲಿಟ್ಟಿದ್ದ ಬಂಗಾರವನ್ನೆಲ್ಲಾ ನೆಬೂಕದ್ನೆಚ್ಚರನು ತೆಗೆದು
ಕೊಂಡನು. ಯೆಹೋವನು ಹೇಳಿದ್ದಂತೆಯೇ ಇದು
ಸಂಭವಿಸಿತು.

14ನೆಬೂಕದ್ನೆಚ್ಚರನು ಜೆರುಸಲೇಮಿನ ಜನರನ್ನೆಲ್ಲಾ
ಸೆರೆಹಿಡಿದನು. ಅವನು ಎಲ್ಲಾ ನಾಯಕರನ್ನು ಮತ್ತು ಹಣ
ವಂತರನ್ನು ಸೆರೆಹಿಡಿದನು. ಅವನು ಹತ್ತು ಸಾವಿರ
ಜನರನ್ನು ಸೆರೆಯಾಳುಗಳನ್ನಾಗಿ ಒಯ್ದನು. ನೆಬೂಕದ್ನೆ
ಚ್ಚರನು ನುರಿತ ತಜ್ಞರನ್ನು ಮತ್ತು ಕಮ್ಮಾರರನ್ನು
ಕರೆದೊಯ್ದನು. ಸಾಮಾನ್ಯ ಜನರನ್ನೂ ಕಡುಬಡವ
ರನ್ನೂ ಬಿಟ್ಟು ಉಳಿದ ಯಾರನ್ನೂ ಬಿಡಲಿಲ್ಲ. 15ನೆಬೂ
ಕದ್ನೆಚ್ಚರನು ಯೆಹೋಯಾಖೀನನನ್ನು ಸೆರೆಯಾಳಾಗಿ
ಬಾಬಿಲೋನಿಗೆ ಕರೆದೊಯ್ದನು. ನೆಬೂಕದ್ನೆಚ್ಚರನು
ರಾಜನ ತಾಯಿಯನ್ನು, ಅವನ ಪತ್ನಿಯರನ್ನು, ಅಧಿಕಾರಿ
ಗಳನ್ನು ಮತ್ತು ದೇಶದ ಪ್ರತಿಷ್ಠಿತರನ್ನು ಕರೆದೊಯ್ದನು.
ನೆಬೂಕದ್ನೆಚ್ಚರನು ಅವರನ್ನು ಜೆರುಸಲೇಮಿನಿಂದ ಬಾಬಿ
ಲೋನಿಗೆ ಸೆರೆಯಾಳುಗಳನ್ನಾಗಿ ಒಯ್ದನು. 16ಬಾಬಿ
ಲೋನ್ ರಾಜನು ಏಳು ಸಾವಿರ ಮಂದಿ ಸೈನಿಕರನ್ನು
ಮತ್ತು ಒಂದು ಸಾವಿರ ಮಂದಿ ನುರಿತ ತಜ್ಞರನ್ನು ಮತ್ತು
ಕಮ್ಮಾರರನ್ನು ಕರೆದೊಯ್ದನು. ಈ ಜನರೆಲ್ಲರೂ ಸೈನಿಕ
ರಾಗಿದ್ದು, ಯುದ್ಧಗಳಲ್ಲಿ ಹೋರಾಡಲು ಸಮರ್ಥರಾಗಿ
ದ್ದರು. ಬಾಬಿಲೋನ್ ರಾಜನು ಅವರನ್ನು ಸೆರೆ
ಯಾಳುಗಳನ್ನಾಗಿ ಬಾಬಿಲೋನಿಗೆ ಒಯ್ದನು.

### ರಾಜನಾದ ಚಿದ್ಕೀಯನು

17ಬಾಬಿಲೋನ್ ರಾಜನು ಮತ್ತನ್ಯನನ್ನು ಹೊಸ ರಾಜ
ನನ್ನಾಗಿ ನೇಮಿಸಿದನು. ಅವನು ಯೆಹೋಯಾಖೀನನ
ಸ್ಥಳವನ್ನು ಪಡೆದನು. ಮತ್ತನ್ಯನು ಯೆಹೋಯಾಖೀನನ
ಚಿಕ್ಕಪ್ಪ. ಬಾಬಿಲೋನ್ ರಾಜನು ಮತ್ತನ್ಯನ ಹೆಸರನ್ನು
ಚಿದ್ಕೀಯ ಎಂದು ಬದಲಾಯಿಸಿದನು.

18ಚಿದ್ಕೀಯನು ಆಳಲಾರಂಭಿಸಿದಾಗ ಅವನಿಗೆ ಇಪ್ಪ
ತ್ತೊಂದು ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿ
ನಲ್ಲಿ ಹನ್ನೊಂದು ವರ್ಷ ಆಳಿದನು. ಅವನ ತಾಯಿಯು
ಲಿಬ್ನದ ಯೆರೆಮೀಯನ ಮಗಳಾದ ಹಮೂಟಲ್ ಎಂಬ
ಹೆಸರಿನವಳು. 19ಯೆಹೋವನು ಕೆಟ್ಟದ್ದೆಂದು ಹೇಳಿದ
ಕಾರ್ಯಗಳನ್ನು ಚಿದ್ಕೀಯನು ಮಾಡಿದನು. ಚಿದ್ಕೀಯನು
ಯೆಹೋಯಾಖೀನನು ಮಾಡಿದಂಥ ಕಾರ್ಯಗಳನ್ನು
ಮಾಡಿದನು.

20ಯೆಹೋವನ ಕೋಪದಿಂದ ಯೆಹೂದಕ್ಕೆ ಮತ್ತು
ಜೆರುಸಲೇಮಿಗೆ ಇವೆಲ್ಲವೂ ಸಂಭವಿಸಿದವು. ಹೀಗೆ
ಯೆಹೋವನು ಅವರನ್ನು ತನ್ನಿಂದ ದೂರಸರಿಸಿದನು.
ಚಿದ್ಕೀಯನು ಬಾಬಿಲೋನ್ ರಾಜನಿಗೆ ವಿರುದ್ಧವಾಗಿ
ದಂಗೆ ಎದ್ದನು.

### ನೆಬೂಕದ್ನೆಚ್ಚರನು ಚಿದ್ಕೀಯನ ಆಳ್ವಿಕೆಯನ್ನು ಕೊನೆಗೊಳಿಸಿದನು

25 ಆದ್ದರಿಂದ ಬಾಬಿಲೋನ್ ರಾಜನಾದ ನೆಬೂಕ
ದ್ನೆಚ್ಚರನು ಜೆರುಸಲೇಮಿನ ವಿರುದ್ಧ ಯುದ್ಧ
ಮಾಡಲು ತನ್ನ ಎಲ್ಲಾ ಸೇನೆಯೊಡನೆ ಬಂದನು. ನೆಬೂ
ಕದ್ನೆಚ್ಚರನು ಜೆರುಸಲೇಮಿನ ಸುತ್ತಲೂ ಪಾಳೆಯ ಮಾಡಿ
ಕೊಂಡು ಮಣ್ಣಿನ ದಿಬ್ಬವನ್ನು ನಿರ್ಮಿಸಿದನು. ಅವನು
ನಗರದೊಳಕ್ಕೆ ಹೋಗುವ ಮತ್ತು ನಗರದಿಂದ ಬರುವ
ಜನರನ್ನು ತಡೆಯಲು ಹೀಗೆ ಮಾಡಿದನು. ಇದು ನೆಬೂಕ
ದ್ನೆಚ್ಚರನ ಆಳ್ವಿಕೆಯ ಒಂಭತ್ತನೆಯ ವರ್ಷದ ಹತ್ತನೆಯ
ತಿಂಗಳಿನ ಹತ್ತನೆಯ ದಿನದಂದು ಸಂಭವಿಸಿತು.
2ನೆಬೂಕದ್ನೆಚ್ಚರನ ಸೇನೆಯು ಜೆರುಸಲೇಮಿನ ಸುತ್ತಲೂ
ಚಿದ್ಕೀಯನು ಯೆಹೂದದ ರಾಜನಾದ ಹನ್ನೊಂದನೆಯ
ವರ್ಷದವರೆಗೆ ನೆಲೆಸಿತು. 3ನಾಲ್ಕನೆಯ ತಿಂಗಳ ಒಂಭತ್ತ
ನೆಯ ದಿನದಂದು ನಗರದಲ್ಲಿ ಭೀಕರ ಬರಗಾಲವಿತ್ತು.
ಅಲ್ಲಿನ ಸಾಮಾನ್ಯರಿಗೆ ಆಹಾರವೇನೂ ಇರಲಿಲ್ಲ.

4ಆಗ ನೆಬೂಕದ್ನೆಚ್ಚರನ ಸೇನೆಯು ನಗರದ ಗೋಡೆ
ಯಲ್ಲಿ ಒಂದು ರಂಧ್ರವನ್ನು ಕೊರೆದರು. ಅಂದಿನ ರಾತ್ರಿ

ರಾಜನಾದ ಚಿದ್ಕೀಯ ಮತ್ತು ಅವನ ಸೈನಿಕರೆಲ್ಲರೂ
ಓಡಿಹೋದರು. ಅವರು ರಾಜನ ತೋಟದ ಎರಡು
ಗೋಡೆಗಳ ಮಧ್ಯಭಾಗದ ರಹಸ್ಯ ಬಾಗಿಲಿನ ಮೂಲಕ
ಓಡಿಹೋದರು. ಬಾಬಿಲೋನ್ ಸೇನೆಯು ನಗರವನ್ನು
ಸುತ್ತುವರಿದಿತ್ತು. ಆದರೆ ಚಿದ್ಕೀಯ ಮತ್ತು ಅವನ
ಸೇನೆಯು ಮರುಭೂಮಿಯ ರಸ್ತೆಯಲ್ಲಿ ತಪ್ಪಿಸಿ
ಕೊಂಡರು. 5 ಬಾಬಿಲೋನ್ ಸೇನೆಯು ರಾಜನಾದ
ಚಿದ್ಕೀಯನನ್ನು ಅಟ್ಟಿಸಿಕೊಂಡು ಹೋಗಿ, ಅವನನ್ನು
ಜೆರಿಕೋವಿನ ಸಮೀಪದಲ್ಲಿ ಹಿಡಿದರು.

6 ಬಾಬಿಲೋನಿನವರು ರಾಜನಾದ ಚಿದ್ಕೀಯನನ್ನು
ರಿಬ್ಲದಲ್ಲಿ ಬಾಬಿಲೋನ್ ರಾಜನಿಗೆ ಒಪ್ಪಿಸಿದರು. ಬಾಬಿ
ಲೋನ್ ರಾಜನು ಚಿದ್ಕೀಯನನ್ನು ದಂಡಿಸಲು ತೀರ್ಮಾ
ನಿಸಿದನು. 7 ಅವರು ಚಿದ್ಕೀಯನ ಮಕ್ಕಳನ್ನು ಅವನ
ಎದುರಿನಲ್ಲಿಯೇ ಕೊಂದುಹಾಕಿದರು. ನಂತರ ಅವರು
ಚಿದ್ಕೀಯನ ಕಣ್ಣುಗಳನ್ನು ಕಿತ್ತುಹಾಕಿದರು. ಅವರು ಅವ
ನನ್ನು ಸರಪಣಿಗಳಿಂದ ಬಂಧಿಸಿ, ಬಾಬಿಲೋನಿಗೆ
ಕೊಂಡೊಯ್ದರು.

## ಜೆರುಸಲೇಮನ್ನು ನಾಶಗೊಳಿಸಲಾಯಿತು

8 ಬಾಬಿಲೋನ್ ರಾಜನಾಗಿದ್ದ ನೆಬೂಕದ್ನೆಚ್ಚರನು ತನ್ನ
ಆಳ್ವಿಕೆಯ ಹತ್ತೊಂಭತ್ತನೆಯ ವರ್ಷದ ಐದನೆಯ ತಿಂಗಳ
ಏಳನೆಯ ದಿನದಂದು ಜೆರುಸಲೇಮಿಗೆ ಬಂದನು.
ನೆಬೂಜರದಾನ ಎಂಬವನು ನೆಬೂಕದ್ನೆಚ್ಚರನ ರಕ್ಷಕ
ದಳದ ಅಧಿಪತಿಯಾಗಿದ್ದನು. 9 ನೆಬೂಜರದಾನನು
ದೇವಾಲಯವನ್ನೂ ರಾಜನ ಅರಮನೆಯನ್ನೂ ಜೆರುಸ
ಲೇಮಿನಲ್ಲಿದ್ದ ಮನೆಗಳನ್ನೆಲ್ಲಾ ಸುಟ್ಟುಹಾಕಿದನು. ಅವನು
ಮಹಾಸೌಧಗಳನ್ನು ನಾಶಗೊಳಿಸಿದನು,

10 ನಂತರ ನೆಬೂಜರದಾನನೊಂದಿಗಿದ್ದ ಬಾಬಿ
ಲೋನ್ ಸೈನ್ಯವು ಜೆರುಸಲೇಮಿನ ಸುತ್ತಲೂ ಇದ್ದ
ಗೋಡೆಯನ್ನು ಕೆಡವಿಹಾಕಿತು. 11 ಆ ನಗರದಲ್ಲಿ ಉಳಿದಿದ್ದ
ಜನರನ್ನೆಲ್ಲಾ ನೆಬೂಜರದಾನನು ಸೆರೆಹಿಡಿದನು. ರಾಜ
ನಾದ ನೆಬೂಕದ್ನೆಚ್ಚರನಿಗೆ ವಿಧೇಯರಾಗಿರಲು ಕೆಲವು
ಜನರು ಒಪ್ಪಿದರು. ಆದರೆ ನೆಬೂಜರದಾನನು ಆ
ಜನರನ್ನೆಲ್ಲಾ ಸೆರೆಹಿಡಿದನು. ಅವನು ನಗರದಲ್ಲಿದ್ದ ಪ್ರತಿ
ಯೊಬ್ಬರನ್ನೂ ಕರೆದೊಯ್ದನು. 12 ಸಾಮಾನ್ಯ ಜನರಲ್ಲಿ
ತೀರ ಬಡವರಾದ ಜನರನ್ನು ಮಾತ್ರ ನೆಬೂಜರದಾನನು
ಅಲ್ಲಿಯೇ ನೆಲೆಸಲು ಬಿಟ್ಟನು. ಆ ಬಡಜನರು ಅಲ್ಲಿಯೇ
ನೆಲೆಸಿ, ಬೇಸಾಯಮಾಡಿ ದ್ರಾಕ್ಷಿಯನ್ನು ಬೆಳೆಯಲು
ಅವರನ್ನು ಬಿಟ್ಟುಬಿಟ್ಟನು.

13 ಬಾಬಿಲೋನ್ ಸೈನಿಕರು ದೇವಾಲಯದಲ್ಲಿದ್ದ
ತಾಮ್ರದ ಸ್ತಂಭಗಳನ್ನು ಚೂರುಚೂರು ಮಾಡಿದರು.
ಅವರು ಯೆಹೋವನ ಆಲಯದಲ್ಲಿದ್ದ ತಾಮ್ರದ ದೊಡ್ಡ
ತೊಟ್ಟಿಯನ್ನು ಮತ್ತು ತಾಮ್ರದ ಬಂಡಿಯನ್ನು ಚೂರು
ಚೂರಾಗಿ ಒಡೆದುಹಾಕಿದರು. ನಂತರ ಬಾಬಿಲೋನ್
ಸೈನಿಕರು ತಾಮ್ರದ ಚೂರುಗಳನ್ನು ಬಾಬಿಲೋನಿಗೆ
ತೆಗೆದುಕೊಂಡು ಹೋದರು. 14 ಬಾಬಿಲೋನಿನವರು
ದೇವಾಲಯದಲ್ಲಿ ಉಪಯೋಗಿಸುತ್ತಿದ್ದ ಬೋಗುಣಿ,
ಸಲಿಕೆ,ಕತ್ತರಿ, ಧೂಪಾರತಿ ಮೊದಲಾದ ತಾಮ್ರದ ವಸ್ತುಗ
ಳನ್ನು ತೆಗೆದುಕೊಂಡು ಹೋದನು. 15 ನೆಬೂಜರದಾನನು
ಅಗ್ನಿಷ್ಟಿಕೆಗಳನ್ನು ಮತ್ತು ಬಟ್ಟಲುಗಳನ್ನು ತೆಗೆದುಕೊಂಡು
ಹೋದನು. ಅವನು ಬಂಗಾರದ ವಸ್ತುಗಳನ್ನು ಬಂಗಾರ
ಕ್ಕಾಗಿಯೂ ಬೆಳ್ಳಿಯ ವಸ್ತುಗಳನ್ನು ಬೆಳ್ಳಿಗಾಗಿಯೂ
ತೆಗೆದುಕೊಂಡು ಹೋದನು. 16 ಅವನು ತೆಗೆದುಕೊಂಡು
ಹೋದ ವಸ್ತುಗಳ ಪಟ್ಟಿಯು ಹೀಗಿದೆ:

ಎರಡು ತಾಮ್ರ ಕಂಬಗಳು, ಒಂದು ತೊಟ್ಟಿ ಮತ್ತು
ದೇವಾಲಯಕ್ಕೆ ಸೊಲೊಮೋನನು ನಿರ್ಮಿಸಿದ್ದ
ಬಂಡಿಗಳು. ಈ ವಸ್ತುಗಳ ತಾಮ್ರವು ತೂಕ ಮಾಡ
ಲಾರದಷ್ಟು ಅಧಿಕವಾಗಿತ್ತು.

17 ಪ್ರತಿಯೊಂದು ಕಂಬವೂ ಸುಮಾರು ಇಪ್ಪತ್ತೇಳು
ಅಡಿ ಉದ್ದವಾಗಿತ್ತು. ಕಂಬಗಳ ಮೇಲಿದ್ದ ಬೋದಿ
ಗೆಗಳನ್ನು ತಾಮ್ರದಿಂದ ನಿರ್ಮಿಸಿದ್ದರು. ಪ್ರತಿ
ಯೊಂದು ಬೋದಿಗೆಯೂ ನಾಲ್ಕುವರೆ ಅಡಿ ಉದ್ದ
ವಾಗಿತ್ತು. ಪ್ರತಿಯೊಂದು ಬೋದಿಗೆಯ ಮೇಲೆ
ಜಾಲರಿಯ ಆಕಾರವಿತ್ತು ಮತ್ತು ದಾಳಿಂಬೆ ಹಣ್ಣು
ಗಳ ಆಕಾರಗಳಿದ್ದವು. ಇವೆಲ್ಲವುಳನ್ನು ತಾಮ್ರ
ದಿಂದಲೇ ಮಾಡಿದ್ದರು. ಎರಡು ಕಂಬಗಳೂ
ಒಂದೇ ರೀತಿಯ ಆಕಾರದಲ್ಲಿದ್ದವು.

## ಯೆಹೂದದ ಜನರನ್ನು ಸೆರೆಯಾಳುಗಳನ್ನಾಗಿಸಿ ಕರೆದೊಯ್ದರು

18 ನಂತರ, ನೆಬೂಜರದಾನನು, ಪ್ರಧಾನಯಾಜಕ
ನಾದ ಸೆರಾಯನನ್ನು, ಎರಡನೆಯ ಯಾಜಕನಾದ
ಚೆಫನ್ಯನನ್ನು ಮತ್ತು ಮೂವರು ದ್ವಾರಪಾಲಕರನ್ನು
ಹಿಡಿದುಕೊಂಡು ಹೋದನು.

19 ನೆಬೂಜರದಾನನು ಸೇನೆಯ ಸೇನಾಧಿಕಾರಿ
ಯೊಬ್ಬನನ್ನು ಹಿಡಿದುಕೊಂಡು ಹೋದನು.
ನೆಬೂಜರದಾನನು ನಗರದಲ್ಲಿ ಸಿಕ್ಕಿದ ರಾಜನ
ಐದು ಮಂದಿ ಸಲಹೆಗಾರರನ್ನು ಹಿಡಿದೊಯ್ದನು.
ಅವನು ಸೇನೆಯ ಅಧಿಕಾರಿಯ ಕಾರ್ಯದರ್ಶಿ
ಯನ್ನು ಹಿಡಿದೊಯ್ದನು. ಸೇನಾಧಿಕಾರಿಯ
ಕಾರ್ಯದರ್ಶಿಯು ಸಾಮಾನ್ಯ ಜನರನ್ನು ಒಟ್ಟು
ಗೂಡಿಸಿ, ಅವರನ್ನು ಸೈನಿಕರನ್ನಾಗಿ ಆರಿಸುತ್ತಿದ್ದನು.
ನೆಬೂಜರದಾನನು ನಗರದಲ್ಲಿ ಸಿಕ್ಕಿದ ಇತರ ಅರ
ವತ್ತು ಮಂದಿಯನ್ನು ಹಿಡಿದೊಯ್ದನು. ಈ ಜನರು
ಸಾಮಾನ್ಯ ಜನರಾಗಿದ್ದರು.

20ನಂತರ ನೆಬೂಜರದಾನನು ಆ ಜನರನ್ನೆಲ್ಲ ರಿಬ್ಲ
ದಲ್ಲಿದ್ದ ಬಾಬಿಲೋನ್ ರಾಜನ ಬಳಿಗೆ ಒಯ್ದನು.
21ಬಾಬಿಲೋನ್ ರಾಜನು ಹಮಾತ್ ದೇಶದ ರಿಬ್ಲದಲ್ಲಿ
ಅವರನ್ನೆಲ್ಲ ಕೊಂದುಹಾಕಿದನು. ಹೀಗೆ ಯೆಹೂದದ
ಜನರನ್ನೆಲ್ಲ ಅವರ ದೇಶದಿಂದ ಸೆರೆಯಾಳುಗಳನ್ನಾಗಿಸಿ
ಹಿಡಿದೊಯ್ದರು.

### ನೆಬೂಕದ್ನೆಚ್ಚರನು ಗೆದಲ್ಯನನ್ನು ಯೆಹೂದದ ರಾಜ್ಯಪಾಲನನ್ನಾಗಿ ನೇಮಿಸಿದನು

22ಬಾಬಿಲೋನ್ ರಾಜನಾದ ನೆಬೂಕದ್ನೆಚ್ಚರನು
ಯೆಹೂದದೇಶದಲ್ಲಿ ಕೆಲವು ಜನರನ್ನು ಬಿಟ್ಟನು. ಅವನು
ಅಹೀಕಾಮನ ಮಗನಾದ ಗೆದಲ್ಯನನ್ನು ಯೆಹೂದದಲ್ಲಿ
ಜನರಿಗೆ ರಾಜ್ಯಪಾಲನನ್ನಾಗಿ ಮಾಡಿದನು. (ಅಹೀಕಾ
ಮನು ಶಾಫಾನನ ಮಗ.)

23ಬಾಬಿಲೋನ್ ರಾಜನು ಗೆದಲ್ಯನನ್ನು ರಾಜ್ಯಪಾಲನ
ನ್ನಾಗಿ ನೇಮಿಸಿರುವುದನ್ನು ಸೇನಾಧಿಪತಿಗಳು ಮತ್ತು
ಅವನ ಜನರು ಕೇಳಿ ಮಿಚ್ಪದಲ್ಲಿದ್ದ ಗೆದಲ್ಯನ ಬಳಿಗೆ
ಬಂದರು. ಈ ಸೇನಾಧಿಪತಿಗಳು ಯಾರೆಂದರೆ: ನೆತನ್ಯನ
ಮಗನಾದ ಇಷ್ಮಾಯೇಲ, ಕಾರೇಹನ ಮಗನಾದ
ಯೋಹಾನಾನ್, ನೆಟೋಫದವನೂ ತನ್ಹುಮೆತನ
ಮಗನೂ ಆದ ಸೆರಾಯ, ಮಾಕಾತ್ಯನ ಮಗನಾದ
ಯಾಜನ್ಯ.

24ನಂತರ ಗೆದಲ್ಯನು ಈ ಸೇನಾಧಿಪತಿಗಳಿಗೆ ಮತ್ತು
ಅವರ ಜನರಿಗೆ, “ಬಾಬಿಲೋನ್ ಅಧಿಕಾರಿಗಳಿಗೆ
ನೀವು ಹೆದರಬೇಡಿ. ನೀವು ದೇಶದಲ್ಲಿ ವಾಸಿಸುತ್ತ
ಬಾಬಿಲೋನ್ ರಾಜನ ಸೇವೆಯನ್ನು ಮಾಡಿ. ಆಗ ನಿಮ
ಗೇನೂ ತೊಂದರೆಯಾಗುವುದಿಲ್ಲ” ಎಂದು ಪ್ರಮಾಣ
ಮಾಡಿದನು.

25ಆದರೆ ಏಳನೆಯ ತಿಂಗಳಲ್ಲಿ, ರಾಜನ ಕುಲದವನೂ
ಎಲೀಷಾಮನ ಮೊಮ್ಮಗನೂ ನೆತನ್ಯನ ಮಗನೂ ಆದ
ಇಷ್ಮಾಯೇಲನು ಹತ್ತು ಜನರೊಂದಿಗೆ ಬಂದು ಗೆದಲ್ಯ
ನನ್ನು ಕೊಂದುಹಾಕಿದನು. ಇಷ್ಮಾಯೇಲ ಮತ್ತು ಅವನ
ಜನರು ಮಿಚ್ಪದಲ್ಲಿ ಗೆದಲ್ಯನ ಜೊತೆಗಿದ್ದ ಯೆಹೂದ್ಯರನ್ನು
ಮತ್ತು ಬಾಬಿಲೋನಿನವರನ್ನು ಕೊಂದುಹಾಕಿದರು.
26ಇದಾದನಂತರ, ಕನಿಷ್ಠರಾದವರೂ ಮತ್ತು ಅತಿ
ಮುಖ್ಯರೂ ಆದ ಜನರೆಲ್ಲರು ಮತ್ತು ಸೇನೆಯ ನಾಯ
ಕರು ಬಾಬಿಲೋನಿನವರಿಗೆ ಹೆದರಿಕೊಂಡು ಈಜಿಪ್ಟಿಗೆ
ಓಡಿಹೋದರು.

27ಬಾಬಿಲೋನ್ ರಾಜನಾದ ಎವೀಲ್ಮೆರೋದಕನು,
ಯೆಹೂದದ ರಾಜನಾದ ಯೆಹೋಯಾಖೀನನನ್ನು
ಸೆರೆಯಿಂದ ಬಿಡುಗಡೆ ಮಾಡಿದನು. ಯೆಹೋಯಾಖೀ
ನನನ್ನು ಸೆರೆಹಿಡಿದ ಮೂವತ್ತೇಳನೆಯ ವರ್ಷದ ನಂತರ
ಇದು ಸಂಭವಿಸಿತು. ಎವೀಲ್ಮೆರೋದಕನ ಆಳ್ವಿಕೆಯ
ಹನ್ನೆರಡನೆ ತಿಂಗಳಿನ ಇಪ್ಪತ್ತೇಳನೆಯ ದಿನದಂದು ಇದು
ಸಂಭವಿಸಿತು. 28ಎವೀಲ್ಮೆರೋದಕನು ಯೆಹೋಯಾಖೀ
ನನೊಂದಿಗೆ ದಯೆಯಿಂದ ಮಾತನಾಡಿದನು. ಎವೀಲ್ಮೆ
ರೋದಕನು ಯೆಹೋಯಾಖೀನನ ಸಿಂಹಾಸನವನ್ನು
ಬಾಬಿಲೋನಿನಲ್ಲಿ ತನ್ನೊಂದಿಗಿದ್ದ ರಾಜರುಗಳ ಸಿಂಹಾಸ
ನಗಳಿಗಿಂತ ಎತ್ತರದಲ್ಲಿರಿಸಿದನು. 29ಎವೀಲ್ಮೆರೋದಕನು
ಯೆಹೋಯಾಖೀನನ ಸೆರೆವಾಸದ ಬಟ್ಟೆಗಳನ್ನು ತೆಗೆಸಿ
ಹೊಸ ಬಟ್ಟೆಗಳನ್ನು ತೊಡಿಸಿದನು. ಯೆಹೋಯಾ
ಖೀನನು ಬದುಕಿರುವ ತನಕ ತನ್ನ ಪಂಕ್ತಿಯಲ್ಲಿ ಊಟ
ಮಾಡಲು ಎವೀಲ್ಮೆರೋದಕನು ಅವಕಾಶ ಮಾಡಿ
ಕೊಟ್ಟನು. 30ಹೀಗೆ ರಾಜನಾದ ಎವೀಲ್ಮೆರೋದಕನ
ಪಂಕ್ತಿಯಲ್ಲಿ ಯೆಹೋಯಾಖೀನನು ತನ್ನ ಉಳಿದ
ಜೀವಿತದಲ್ಲಿ ಊಟಮಾಡಿದನು.

# 1 ಪೂರ್ವಕಾಲವೃತ್ತಾಂತ

### ವಂಶಾವಳಿಗಳು – ಆದಾಮನಿಂದ ನೋಹನ ತನಕ

1 1-3ಆದಾಮ್, ಶೇತ್, ಏನೋಷ್, ಕೇನಾನ್, ಮಹ
ಲಲೇಲ್, ಯೆರೆದ್, ಹನೋಕ್, ಮೆತೂಷೆಲಹ,
ಲೆಮೆಕ್ ಮತ್ತು ನೋಹ.
4ನೋಹನ ಮಕ್ಕಳು ಯಾರೆಂದರೆ: ಶೇಮ್, ಹಾಮ್
ಮತ್ತು ಯೆಫೆತ್.

### ಯೆಫೆತನ ಸಂತತಿಯವರು

5ಯೆಫೆತನ ಗಂಡುಮಕ್ಕಳು: ಗೋಮೆರ್,
ಮಾಗೋಗ್, ಮಾದಯ್, ಯಾವಾನ್, ತೂಬಲ್,
ಮೆಷೆಕ್ ಮತ್ತು ತೀರಾಸ್.
6ಗೋಮೆರನ ಗಂಡುಮಕ್ಕಳು: ಅಷ್ಕೆನಜ್, ರೀಫತ್
ಮತ್ತು ತೊಗರ್ಮ.
7ಯಾವಾನನ ಗಂಡುಮಕ್ಕಳು: ಎಲೀಷ, ತಾರ್ಷೀಷ್,
ಕಿತ್ತೀಮ್ ಮತ್ತು ದೋದಾನೀಮ್.

### ಹಾಮನ ಸಂತತಿಯವರು

8ಹಾಮನ ಸಂತತಿಯವರು ಯಾರೆಂದರೆ: ಕೂಷ್,
ಮಿಚ್ರಯಿಮ್, ಪೂಟ್ ಮತ್ತು ಕಾನಾನ್.
9ಕೂಷನ ಸಂತತಿಯವರು: ಸೆಬ, ಹವೀಲ, ಸಬ್ತ, ರಮ್ಮ
ಮತ್ತು ಸಬ್ತೆಕ. ರಮ್ಮನ ಸಂತತಿಯವರು: ಶೆಬ ಮತ್ತು
ದೆದಾನ್.
10ಕೂಷನ ಸಂತತಿಯವನಾದ ನಿಮ್ರೋದನು ದೊಡ್ಡ
ವನಾಗಿ ಪ್ರಖ್ಯಾತ ರಣವೀರನಾದನು. ಲೋಕದೊಳಗೆ
ಅವನಂಥವನು ಯಾರೂ ಇರಲಿಲ್ಲ.
11ಮಿಚ್ರಯಿಮ್ಯನು ಲೂದ್ಯರಿಗೂ ಅನಾಮ್ಯರಿಗೂ
ಲೆಹಾಬ್ಯರಿಗೂ ನಫ್ತುಹ್ಯರಿಗೂ 12ಪತ್ರುಸ್ಯರಿಗೂ ಕಸ್ಲುಹ್ಯ
ರಿಗೂ ಕಫ್ತೋರ್ಯರಿಗೂ ಮೂಲಪಿತೃ. ಫಿಲಿಷ್ಟಿಯರು
ಕಸ್ಲುಹ್ಯರಿಂದ ಬಂದವರು.
13ಕಾನಾನನು ಸೀದೋನನ ತಂದೆ. ಸೀದೋನನು
ಅವನ ಚೊಚ್ಚಲಮಗನು. ಕಾನಾನನು ಹಿತ್ತೀಯರ
ಮೂಲಪಿತೃ. 14ಇದಲ್ಲದೆ ಯೆಬೂಸಿಯರಿಗೆ, ಅಮೋರಿ
ಯರಿಗೆ, ಗಿರ್ಗಾಷಿಯರಿಗೆ, 15ಹಿವ್ವಿಯರಿಗೆ,
ಅರ್ಕಿಯರಿಗೆ, ಸೀನಿಯರಿಗೆ, 16ಅರ್ವಾದಿಯರಿಗೆ,
ಚೆಮಾರಿಯರಿಗೆ ಮತ್ತು ಹಮಾತಿಯರಿಗೆ ಕಾನಾನನು
ಮೂಲಪಿತೃವಾಗಿದ್ದನು.

### ಶೇಮನ ಸಂತತಿಯವರು

17ಶೇಮನ ಗಂಡುಮಕ್ಕಳು ಯಾರೆಂದರೆ: ಏಲಾಮ್,
ಅಶ್ಶೂರ್, ಅರ್ಪಕ್ಷದ್, ಲೂದ್ ಮತ್ತು ಅರಾಮ್.
ಅರಾಮನ ಮಕ್ಕಳು ಯಾರೆಂದರೆ: ಊಚ್, ಹೂಲ್,
ಗೆತೆರ್ ಮತ್ತು ಮೆಷೆಕ್.
18ಅರ್ಪಕ್ಷದನು ಶೆಲಹನನ್ನು ಪಡೆದನು. ಶೆಲಹನು
ಏಬೆರನನ್ನು ಪಡೆದನು.
19ಏಬೆರನಿಗೆ ಇಬ್ಬರು ಮಕ್ಕಳಿದ್ದರು. ಒಬ್ಬನ ಹೆಸರು
ಪೆಲೆಗ್.* ಇವನ ಜೀವಮಾನಕಾಲದಲ್ಲಿ ಭೂಲೋಕದ
ಜನರು ತಮ್ಮತಮ್ಮ ಭಾಷೆಗನುಸಾರವಾಗಿ ಗುಂಪು
ಗುಂಪಾಗಿ ಪ್ರತ್ಯೇಕವಾದರು. ಪೆಲೆಗನ ತಮ್ಮನ ಹೆಸರು
ಯೊಕ್ತಾನ್. 20ಇವನ ಗಂಡು ಮಕ್ಕಳು: ಅಲ್ಮೋದಾದ್,
ಶೆಲೆಫ್, ಹಚರ್ಮಾವೆತ್, ಯೆರಹ, 21ಹದೋರಾಮ್,
ಊಜಾಲ್, ದಿಕ್ಲ, 22ಏಬಾಲ್, ಅಬೀಮಾಯೇಲ್,
ಶೆಬಾ, 23ಓಫೀರ್, ಹವೀಲಾ ಮತ್ತು ಯೋಬಾಬ್.

### ಅಬ್ರಹಾಮನ ಸಂತತಿಯವರು

24ಶೇಮನ ಸಂತತಿಯವರು ಯಾರೆಂದರೆ: ಅರ್ಪ
ಕ್ಷದ್, ಶೆಲಹ, 25ಏಬೆರ್, ಪೆಲೆಗ್, ರೆಯೂ,
26ಸೆರೂಗ್, ನಾಹೋರ್, ತೆರಹ, 27ಮತ್ತು ಅಬ್ರಾಮ.
(ಇವನನ್ನು ಅಬ್ರಹಾಮ ಎಂತಲೂ ಕರೆಯುತ್ತಿದ್ದರು.)
28ಅಬ್ರಹಾಮನ ಗಂಡುಮಕ್ಕಳು: ಇಸಾಕ್ ಮತ್ತು
ಇಷ್ಮಾಯೇಲ್, 29ಇವರು ಅಬ್ರಹಾಮನ ಸಂತತಿ
ಯವರು.

ಇಷ್ಮಾಯೇಲನ ಮೊದಲನೇ ಮಗ ನೆಬಾಯೋತನು.
ಅವನ ಇತರ ಗಂಡುಮಕ್ಕಳು ಯಾರೆಂದರೆ: ಕೇದಾರ್,
ಅದ್ಬೆಯೇಲ್, ಮಿಬ್ಸಾಮ್, 30ಮಿಷ್ಮ, ದೂಮ, ಮಸ್ಸ,
ಹದದ್, ತೇಮ, 31ಯೆಟೂರ್, ನಾಫೀಷ್ ಮತ್ತು
ಕೇದೆಮ. ಇವರೇ ಇಷ್ಮಾಯೇಲನ ಮಕ್ಕಳು.

---

**ಪೆಲೆಗ್** ಇದರರ್ಥ, ‘‘ವಿಭಾಗ.’’

32ಕೆಟೂರಳು ಅಬ್ರಹಾಮನ ದಾಸಿಯಾಗಿದ್ದಳು. ಆಕೆಗೆ
ಅಬ್ರಹಾಮನಲ್ಲಿ ಹುಟ್ಟಿದ ಗಂಡುಮಕ್ಕಳು ಯಾರೆಂದರೆ:
ಜಿಮ್ರಾನ್, ಯೊಕ್ಷಾನ್, ಮೆದಾನ್, ಮಿದ್ಯಾನ್,
ಇಷ್ಬಾಕ್ ಮತ್ತು ಶೂಹ.

ಯೊಕ್ಷಾನನ ಮಕ್ಕಳು ಯಾರೆಂದರೆ: ಶೆಬ ಮತ್ತು
ದೆದಾನ್.

33ಮಿದ್ಯಾನನ ಗಂಡುಮಕ್ಕಳು ಯಾರೆಂದರೆ: ಏಫ,
ಏಫೆರ್, ಹನೋಕ್, ಅಬೀದ ಮತ್ತು ಎಲ್ದಾಯ. ಇವರು
ಕೆಟೂರಳ ಸಂತತಿಯವರು.

### ಸಾರಳ ಗಂಡುಮಕ್ಕಳು

34ಅಬ್ರಹಾಮನು ಇಸಾಕನ ತಂದೆ. ಇಸಾಕನ ಗಂಡು
ಮಕ್ಕಳು ಯಾರೆಂದರೆ: ಏಸಾವ ಮತ್ತು ಇಸ್ರೇಲ್.
35ಏಸಾವನ ಗಂಡುಮಕ್ಕಳು ಯಾರೆಂದರೆ: ಎಲೀಫಜ್,
ರೆಯೂವೇಲ್, ಯೆಯೂಷ್, ಯಳಾಮ್ ಮತ್ತು
ಕೋರಹ.

36ಎಲೀಫಜನ ಗಂಡುಮಕ್ಕಳು ಯಾರೆಂದರೆ:
ತೇಮಾನ್, ಓಮಾರ್, ಚೆಫೀ, ಗತಾಮ್ ಮತ್ತು ಕೆನಜ್.
ಅವನಿಗೆ ತಿಮ್ನಳಲ್ಲಿ ಹುಟ್ಟಿದ ಅಮಾಲೇಕ್ ಎಂಬ ಒಬ್ಬ
ಮಗನಿದ್ದನು. 37ರೆಯೂವೇಲನ ಗಂಡು ಮಕ್ಕಳು
ಯಾರೆಂದರೆ: ನಹತ್, ಜೆರಹ, ಶಮ್ಮ ಮತ್ತು ಮಿಜ್ಜ.

### ಸೇಯಿರಾನ ಎದೋಮ್ಯರು

38ಸೇಯಿರಾನ ಗಂಡುಮಕ್ಕಳು ಯಾರೆಂದರೆ:
ಲೋಟಾನ್, ಶೋಬಾಲ್, ಚಿಬ್ಯೋನ್, ಅನಾಹ,
ದೀಶೋನ್, ಏಚೆರ್ ಮತ್ತು ದೀಶಾನ್.

39ಲೋಟಾನನ ಗಂಡುಮಕ್ಕಳು ಯಾರೆಂದರೆ:
ಹೋರೀ ಮತ್ತು ಹೋಮಾಮ್. ಲೋಟಾನನಿಗೆ ತಿಮ್ನ
ಎಂಬ ಒಬ್ಬ ಸಹೋದರಿಯೂ ಇದ್ದಳು.

40ಶೋಬಾಲನ ಮಕ್ಕಳು ಯಾರೆಂದರೆ: ಅಲ್ಯಾನ್,
ಮಾನಹತ್, ಏಬಾಲ್, ಶೆಫೀ ಮತ್ತು ಓನಾಮ್.

ಚಿಬ್ಯೋನನ ಮಕ್ಕಳು ಯಾರೆಂದರೆ: ಅಯ್ಯಾಹ ಮತ್ತು
ಅನಾಹ.

41ದೀಶೋನನು ಅನಾಹನ ಮಗನು.

ದೀಶೋನನು ಹಮ್ರಾನ್, ಎಷ್ಬಾನ್, ಇತ್ರಾನ್ ಮತ್ತು
ಕೆರಾನ್ ಎಂಬವರನ್ನು ಪಡೆದನು.

42ಏಚೆರನ ಮಕ್ಕಳು ಯಾರೆಂದರೆ: ಬಿಲ್ಹಾನ್.
ಜಾವಾನ್ ಮತ್ತು ಯಾಕಾನ್.

ದೀಶಾನನ ಮಕ್ಕಳು: ಊಚ್ ಮತ್ತು ಅರಾನ್.

### ಎದೋಮ್ಯರ ಅರಸರು

43ಇಸ್ರೇಲರಲ್ಲಿ ಅರಸುಗಳು ಪ್ರಾರಂಭವಾಗುವ
ದಕ್ಕಿಂತ ಮಂಚೆ ಎದೋಮ್ಯರಲ್ಲಿ ಅರಸರಿದ್ದರು. ಅವರು
ಯಾರೆಂದರೆ: ಮೊದಲನೇ ಅರಸನಾದ ಬೆಳ. ಇವನು
ಬೆಯೋರನ ಮಗನು. ದಿನ್ಹಾಬಾ ಎಂಬುದು ಬೆಳನ
ಪಟ್ಟಣವಾಗಿತ್ತು. 44ಬೆಳನು ಸತ್ತಾಗ ಜೆರಹನ ಮಗ ನಾದ
ಯೋಬಾಬನು ಅರಸನಾದನು. ಇವನು ಬೊಚ್ರ ಎಂಬ
ಊರಿನವನು.

45ಯೋಬಾಬ ಅರಸನು ಸತ್ತಾಗ ತೇಮಾನೀಯರ
ದೇಶದವನಾದ ಹೂಷಾಮನು ಅರಸನಾದನು.

46ಹೂಷಾಮನು ಸತ್ತಾಗ ಬೆದದನ ಮಗನಾದ
ಹದದನು ಅರಸನಾದನು. ಇವನು ಮೋವಾಬ್ ದೇಶ
ದಲ್ಲಿ ಮಿದ್ಯಾನರನ್ನು ಸೋಲಿಸಿದನು. ಹದದನ ಪಟ್ಟಣ
ಅವೀತ್ ಆಗಿತ್ತು.

47ಹದದನು ಮರಣ ಹೊಂದಿದ ನಂತರ ಮಸ್ರೇಕ
ಊರಿನ ಸಮ್ಲಾಹನು ಅರಸನಾದನು.

48ಸಮ್ಲಾಹನು ಸತ್ತಾಗ ಯೂಫ್ರೇಟೀಸ್ ನದಿ ಬಳಿಯ
ರೆಹೋಬೋತ್ ಎಂಬ ಊರಿನ ಸೌಲ ಎಂಬವನು
ಅರಸನಾದನು.

49ಸೌಲನು ಸತ್ತಾಗ ಅಕ್ಬೋರನ ಮಗನಾದ ಬಾಳ್ಹಾ
ನಾನನು ಅರಸನಾದನು.

50ಬಾಳ್ಹಾನಾನನು ಸತ್ತಾಗ ಹದದನು ಅರಸನಾದನು.
ಈತನು ಪಾಗೀ ಎಂಬ ನಗರವನ್ನು ಕಟ್ಟಿದನು. ಮೆಹೇ
ಟಬೇಲ್ ಎಂಬಾಕೆ ಹದದನ ಹೆಂಡತಿ. ಈಕೆ ಮೆಟ್ರೇದಳ
ಮಗಳು ಮತ್ತು ಮೇಜಾಹಾಬನ ಮೊಮ್ಮಗಳು. 51ಹದ
ದನು ಸತ್ತನು. ಎದೋಮ್ಯರ ನಾಯಕರು ಯಾರೆಂದರೆ:
ತಿಮ್ನ, ಅಲ್ಯ, ಯೆತೇತ್, 52ಒಹೋಲೀಬಾಮ, ಏಲ,
ಪೀನೋನ್, 53ಕೆನಜ್, ತೇಮಾನ್, ಮಿಬ್ಚಾರ್,
54ಮಗ್ದೀಯೇಲ್ ಮತ್ತು ಗೀರಾಮ್. ಇದು ಎದೋ
ಮ್ಯರ ನಾಯಕರುಗಳ ಪಟ್ಟಿ.

### ಇಸ್ರೇಲನ ಗಂಡುಮಕ್ಕಳು

2 ಇಸ್ರೇಲನ ಗಂಡುಮಕ್ಕಳು ಯಾರೆಂದರೆ:
ರೂಬೇನ್, ಸಿಮೆಯೋನ್, ಲೇವಿ, ಯೆಹೂದ,
ಇಸ್ಸಾಕಾರ್, ಜೆಬುಲೂನ್, 2ದಾನ್, ಯೋಸೇಫ್,
ಬೆನ್ಯಾಮೀನ್, ನಫ್ತಾಲಿ, ಗಾದ್ ಮತ್ತು ಆಶೇರ್.

### ಯೆಹೂದನ ಗಂಡುಮಕ್ಕಳು

3ಯೆಹೂದನ ಗಂಡುಮಕ್ಕಳು ಯಾರೆಂದರೆ: ಏರ್,
ಓನಾನ್ ಮತ್ತು ಶೆಲಾಹ. ಬತ್ಷೂವಳು ಇವರ ತಾಯಿ.
ಈಕೆ ಕಾನಾನ್ಯಳು. ಯೆಹೂದನ ಚೊಚ್ಚಲಮಗ ಏರ್.
ಯೆಹೋವನ ದೃಷ್ಟಿಯಲ್ಲಿ ಇವನು ಕೆಟ್ಟವನಾಗಿದ್ದ ಕಾರಣ
ಕೊಲ್ಲಲ್ಪಟ್ಟನು. 4ಯೆಹೂದನ ಸೊಸೆಯಾಗಿದ್ದ ತಾಮಾ
ರಳು ಯೆಹೂದನಿಂದ ಪೆರೆಚ್ ಮತ್ತು ಜೆರಹ ಎಂಬ
ಇಬ್ಬರು ಗಂಡುಮಕ್ಕಳನ್ನು ಹೆತ್ತಳು. ಹೀಗೆ ಯೆಹೂದನಿಗೆ
ಐದು ಗಂಡು ಮಕ್ಕಳಾದವು.

5ಪೆರೆಚನ ಗಂಡುಮಕ್ಕಳು ಯಾರೆಂದರೆ: ಹೆಚ್ರೋನ್
ಮತ್ತು ಹಾಮೂಲ್.
6ಜೆರಹನಿಗೆ ಐದು ಗಂಡುಮಕ್ಕಳು. ಅವರು
ಯಾರೆಂದರೆ: ಜಿಮ್ರಿ, ಏತಾನ್, ಹೇಮಾನ್, ಕಲ್ಕೋಲ್
ಮತ್ತು ದಾರ.
7(ಕರ್ಮೀಯು ಜಿಮ್ರಿಯ ಮಗನು.) ಜಿಮ್ರಿಯು
ಆಕಾನನ ಮಗನು. ಈ ಆಕಾನನು ಯುದ್ಧದಲ್ಲಿ ಮೀಸ
ಲಾದ ವಸ್ತುಗಳನ್ನು ಕದ್ದುಕೊಂಡು ಇಸ್ರೇಲರಿಗೆ ದೊಡ್ಡ
ಆಪತ್ತನ್ನು ತಂದವನು
8ಅಜರ್ಯನು ಏತಾನನ ಮಗನು.
9ಹೆಚ್ರೋನನ ಗಂಡುಮಕ್ಕಳು ಯಾರೆಂದರೆ: ಯೆರ
ಹ್ಮೇಲ್, ರಾಮ್ ಮತ್ತು ಕಾಲೇಬ್.

## ರಾಮನ ಸಂತತಿಯವರು

10ರಾಮನು ಅಮ್ಮೀನಾದಾಬನ ತಂದೆ. ಇವನು ನಹ
ಶೋನನ ತಂದೆ. ನಹಶೋನನು ಯೆಹೂದ ಕುಲದ
ನಾಯಕನಾಗಿದ್ದನು. 11ನಹಶೋನನು ಸಲ್ಮೋನನ
ತಂದೆ. ಸಲ್ಮೋನನು ಬೋವಜನ ತಂದೆ. 12-13ಬೋವ
ಜನು ಓಬೇದ್‌ನ ತಂದೆ. ಓಬೇದನು ಇಷಯನ ತಂದೆ.
ಇಷಯನು ಎಲೀಯಾಬನ ತಂದೆ. ಎಲೀಯಾಬನು
ಇಷಯನ ಚೊಚ್ಚಲಮಗನು; ಎರಡನೆಯವನು ಅಬೀನಾ
ದಾಬ್; ಮೂರನೆಯವನು ಶಿಮ್ಮ; 14ನಾಲ್ಕನೆಯವನು
ನೆತನೇಲ್, ಐದನೆಯವನು ರದ್ದೈ, 15ಆರನೆಯವನು
ಓಚೆಮ್, ಏಳನೆಯವನು ದಾವೀದ. 16ಅವರ ತಂಗಿ
ಯಂದಿರು ಯಾರೆಂದರೆ, ಚೆರೂಯ ಮತ್ತು ಅಬೀಗೈಲ್,
ಚೆರೂಯಳ ಮೂರು ಮಕ್ಕಳು ಯಾರೆಂದರೆ, ಅಬ್ಷೈ,
ಯೋವಾಬ್ ಮತ್ತು ಅಸಾಹೇಲ್. 17ಅಬೀಗೈಲಳು
ಅಮಾಸನ ತಾಯಿ. ಅಮಾಸನ ತಂದೆ ಯೆತೆರ್, ಇವನು
ಇಷ್ಮಾಯೇಲ್ಯನು.

## ಕಾಲೇಬನ ಸಂತತಿಯವರು

18ಕಾಲೇಬನು ಹೆಚ್ರೋನನ ಮಗನು. ಅವನ ಹೆಂಡತಿ
ಯಾದ ಅಜೂಬಳಲ್ಲಿ ಅವನಿಗೆ ಹುಟ್ಟಿದ ಗಂಡುಮಕ್ಕಳು
ಯಾರೆಂದರೆ, ಯೇಷೆರ್, ಶೋಬಾಬ್ ಮತ್ತು
ಅರ್ದೋನ್. 19ಅಜೂಬಳು ಸತ್ತ ಮೇಲೆ ಕಾಲೇಬನು
ಎಫ್ರಾತಳನ್ನು ಮದುವೆಯಾದನು. ಅವರಿಗೆ ಹೂರ್
ಎಂಬ ಮಗನು ಹುಟ್ಟಿದನು. 20ಹೂರನು ಊರಿಯನ
ತಂದೆ. ಊರಿಯು ಬೆಚಲೇಲನ ತಂದೆ.
21ಹೆಚ್ರೋನನು ಅರವತ್ತು ವರ್ಷ ಪ್ರಾಯದವ
ನಾದಾಗ ಗಿಲ್ಯಾದನ ತಂದೆಯಾದ ಮಾಕೀರನ ಮಗಳನ್ನು
ಮದುವೆಯಾದನು. ಆಕೆಯಲ್ಲಿ ಹೆಚ್ರೋನನು ಸೆಗೂಬ
ನನ್ನು ಪಡೆದಳು. 22ಸೆಗೂಬನು ಯಾಯೀರನ ತಂದೆ.
ಇವನಿಗೆ ಗಿಲ್ಯಾದ್ ಪ್ರಾಂತ್ಯದಲ್ಲಿ ಇಪ್ಪತ್ತಮೂರು ಪಟ್ಟಣ
ಗಳಿದ್ದವು. 23ಆದರೆ ಗೆಷೂರ್ಯರ ಮತ್ತು ಅರಾಮ್ಯನು
ಯಾಯೀರನ ಊರುಗಳನ್ನು ವಶಪಡಿಸಿಕೊಂಡರು.
ಅದರಲ್ಲಿ ಕೆನತ್ ಮತ್ತು ಅದರ ಸುತ್ತಮುತ್ತಲಿದ್ದ ಕೆಲವು
ಹಳ್ಳಿಗಳು ಸೇರಿದ್ದವು. ಒಟ್ಟು ಅರವತ್ತು ಸಣ್ಣ ಪಟ್ಟಣ
ಗಳಿದ್ದವು. ಇವೆಲ್ಲವೂ ಗಿಲ್ಯಾದನ ತಂದೆಯಾದ
ಮಾಕೀರನಿಗೆ ಸೇರಿದವುಗಳಾಗಿದ್ದವು.
24(ಹೆಚ್ರೋನನ ಹೆಂಡತಿ ಅಬೀಯ.) ಹೆಚ್ರೋನನು
ಕಾಲೇಬ್ ಎಫ್ರಾತದಲ್ಲಿ ಸತ್ತನು. ಅವನ ಮರಣದನಂತರ
ಅಬೀಯಳು ಅವನಿಗೆ ಅಷ್ಹೂರ್ ಎಂಬ ಮಗನನ್ನು
ಹೆತ್ತಳು. ಅಷ್ಹೂರನು ತೆಕೋವನ ತಂದೆ.

## ಯೆರಹ್ಮೇಲನ ಸಂತತಿಯವರು

25ಹೆಚ್ರೋನನ ಚೊಚ್ಚಲಮಗನು ಯೆರಹ್ಮೇಲ. ಇವನ
ಗಂಡುಮಕ್ಕಳು ಯಾರೆಂದರೆ: ರಾಮ್, ಬೂನ, ಓರೆನ್,
ಓಚೆಮ್ ಮತ್ತು ಅಹೀಯ. ರಾಮನು ಯೆರಹ್ಮೇಲನ
ಚೊಚ್ಚಲಮಗನು. 26ಯೆರಹ್ಮೇಲನ ಎರಡನೆಯ ಹೆಂಡತಿ
ಯಾಗಿದ್ದ ಅಟಾರಳಲ್ಲಿ ಓನಾಮ್ ಹುಟ್ಟಿದನು.
27ಯೆರಹ್ಮೇಲನ ಚೊಚ್ಚಲಮಗನಾದ ರಾಮನಿಗೆ
ಮಾಚ್, ಯಾಮೀನ್ ಮತ್ತು ಏಕೆರ್ ಎಂಬ ಮಕ್ಕಳಿ
ದ್ದರು. 28ಓನಾಮನ ಗಂಡುಮಕ್ಕಳು ಯಾರೆಂದರೆ:
ಶಮ್ಮೈ, ಮತ್ತು ಯಾದ. ಶಮ್ಮೈಯ ಮಕ್ಕಳು: ನಾದಾಬ್
ಮತ್ತು ಅಬೀಷೂರ್.
29ಅಬೀಷೂರನ ಹೆಂಡತಿಯ ಹೆಸರು ಅಬೀಹೈಲ್.
ಇವರಿಗೆ ಅಹ್ಬಾನ್ ಮತ್ತು ಮೋಲೀದ್ ಎಂಬ ಗಂಡು
ಮಕ್ಕಳು ಇದ್ದರು.
30ನಾದಾಬನ ಮಕ್ಕಳು ಯಾರೆಂದರೆ: ಸೆಲೆದ್ ಮತ್ತು
ಅಪ್ಪಯಿಮ್. ಸೆಲೆದನು ಮಕ್ಕಳಿಲ್ಲದೆ ಸತ್ತನು. 31ಅಪ್ಪಯಿ
ಮನ ಮಗ ಇಷ್ಷೀ; ಇಷ್ಷೀಯ ಮಗನು ಶೇಷಾನ್;
ಶೇಷಾನನ ಮಗ ಅಹ್ಲೈ.
32ಶಮ್ಮೈಯ ತಮ್ಮನ ಹೆಸರು ಯಾದ. ಇವನಿಗೆ ಯೆತೆರ್
ಮತ್ತು ಯೋನಾತಾನ್ ಎಂಬ ಇಬ್ಬರು ಗಂಡು
ಮಕ್ಕಳಿದ್ದರು. ಯೆತೆರನು ಮಕ್ಕಳಿಲ್ಲದೆ ಸತ್ತನು.
33ಯೋನಾತಾನನ ಗಂಡುಮಕ್ಕಳು: ಪೆಲೆತ್ ಮತ್ತು
ಜಾಜ. ಇದು ಯೆರಹ್ಮೇಲನ ಮಕ್ಕಳ ಪಟ್ಟಿ.
34ಶೇಷಾನನಿಗೆ ಗಂಡುಮಕ್ಕಳಿರಲಿಲ್ಲ. ಹೆಣ್ಣುಮಕ್ಕಳೇ
ಇದ್ದರು. ಇವನಿಗೆ ಈಜಿಪ್ಟಿನ ಯರ್ಹ ಎಂಬ ಸೇವಕನು
ಇದ್ದನು. 35ಶೇಷಾನ ತನ್ನ ಮಗಳನ್ನು ಯರ್ಹನಿಗೆ ಕೊಟ್ಟು
ಮದುವೆಮಾಡಿಸಿದನು. ಇವರಿಗೆ ಅತ್ತೈ ಎಂಬ ಮಗನು
ಹುಟ್ಟಿದನು.
36ಅತ್ತೈ ನಾತಾನನ ತಂದೆ. ನಾತಾನನು ಜಾಬಾದನ
ತಂದೆ.
37ಜಾಬಾದನು ಎಫ್ಲಾಲನ ತಂದೆ. ಎಫ್ಲಾಲನು
ಓಬೇದನ ತಂದೆ.

38ಓಬೇದನು ಯೇಹೂವಿನ ತಂದೆ; ಯೇಹೂವು
ಅಜರ್ಯನ ತಂದೆ.
39ಅಜರ್ಯನು ಹೆಲೆಚನ ತಂದೆ; ಹೆಲೆಚನು ಎಲ್ಲಾಸನ
ತಂದೆ.
40ಎಲ್ಲಾಸನು ಸಿಸ್ಮೈನ ತಂದೆ; ಸಿಸ್ಮೈನು ಶಲ್ಲೂಮನ
ತಂದೆ.
41ಶಲ್ಲೂಮನು ಯೆಕಮ್ಯಾಹನ ತಂದೆ. ಯೆಕಮ್ಯಾಹನು
ಎಲೀಷಾಮನ ತಂದೆ.

## ಕಾಲೇಬನ ಕುಟುಂಬ

42ಕಾಲೇಬನು ಯೆರಹ್ಮೇಲನ ತಮ್ಮ. ಅವನಿಗೆ ಕೆಲವು
ಗಂಡುಮಕ್ಕಳಿದ್ದರು. ಚೊಚ್ಚಲಮಗನು ಮೇಷ.
ಮೇಷನು ಜೀಫ್ಯನ ತಂದೆ. ಮಾರೇಷನು ಸಹ ಕಾಲೇಬನ
ಮಗ. ಮಾರೇಷನು ಹೆಬ್ರೋನನ ತಂದೆ.
43ಹೆಬ್ರೋನನ ಗಂಡುಮಕ್ಕಳು ಯಾರೆಂದರೆ:
ಕೋರಹ, ತಪ್ಪೂಹ, ರೆಕೆಮ್ ಮತ್ತು ಶೆಮ. 44ಶೆಮ್ಯನ
ಮಗನು ರಹಮ್ಯ. ರಹಮ್ಯನು ಯೊರ್ಕೆಯಾಮ್ಯನ ತಂದೆ.
ರೆಕೆಮನು ಶಮ್ಮೈಯನ ತಂದೆ. 45ಶಮ್ಮೈಯನ ಮಗ
ಮಾವೋನ್, ಇವನ ಮಗನು ಬೇತ್ಸೂರ್.
46ಕಾಲೇಬನ ದಾಸಿಯ ಹೆಸರು ಏಫ. ಈಕೆಯು
ಹಾರಾನ್, ಮೋಚ ಮತ್ತು ಗಾಜೇಜನ ತಾಯಿ.
47ಯಾದೈಯಳ ಗಂಡುಮಕ್ಕಳು ಯಾರೆಂದರೆ:
ರೆಗೆಮ್, ಯೋತಾಮ್, ಗೇಷಾನ್, ಪೆಲೆಟ್, ಏಫ
ಮತ್ತು ಶಾಫ್.
48ಮಾಕಳು ಕಾಲೇಬನ ಇನ್ನೊಬ್ಬ ದಾಸಿ. ಈಕೆ ಶೆಬೆರ್
ಮತ್ತು ತಿರ್ಹನ ಎಂಬವರ ತಾಯಿ. 49ಈಕೆಯು ಶಾಫ್
ಮತ್ತು ಶೆವನ ತಾಯಿಯೂ ಆಗಿದ್ದಳು. ಶಾಫನ ಮಗ
ಮದ್ಮನ್ನ. ಶೆವನು ಮಕ್‌ಬೇನ ಮತ್ತು ಗಿಬ್ಯನ ತಂದೆ.
ಕಾಲೇಬನ ಮಗಳ ಹೆಸರು ಅಕ್ಸಾಹ.
50ಇದು ಕಾಲೇಬನ ಸಂತತಿಯವರ ಪಟ್ಟಿ: ಕಾಲೇಬನ
ಚೊಚ್ಚಲಮಗನು ಹೂರ. ಇವನು ಎಫ್ರಾತಳಿಗೆ ಹುಟ್ಟಿದ
ವನು. ಹೂರನ ಗಂಡುಮಕ್ಕಳು ಯಾರೆಂದರೆ, ಕಿರ್ಯ
ತ್ಯಾರೀಮ್ ಕಟ್ಟಿದವನಾದ ಶೋಬಾಲ್ ಮತ್ತು
51ಬೇತ್ಲೆಹೇಮನ್ನು ಕಟ್ಟಿದವನಾದ ಸಲ್ಮ ಮತ್ತು ಬೇತ್ಗಾ
ದೇರ್ ಕಟ್ಟಿದವನಾದ ಹಾರೇಫ್. 52ಶೋಬಾಲನು
ಕಿರ್ಯತ್ಯಾರೀಮನ್ನು ಕಟ್ಟಿದನು. ಇದು ಶೋಬಾಲನ
ಸಂತತಿಯವರ ಪಟ್ಟಿ: ಹಾರೋಯೆ ಮತ್ತು ಮಾನಹತಿ
ಊರಿನ ಅರ್ಧಜನರು; 53ಮತ್ತು ಕಿರ್ಯತ್ಯಾರೀಮಿನ
ಕುಟುಂಬದವರು. ಇವರು ಯೆತೆರಿಯರು, ಪೂತ್ಯರು,
ಶುಮಾತ್ಯರು ಮತ್ತು ಮಿಷ್ರಾಗ್ಯರು. ಇವರಿಂದ ಚೊರ್ರಾ
ತ್ಯರು ಮತ್ತು ಎಷ್ಟಾವೋಲ್ಯರು ಬಂದರು.
54ಸಲ್ಮನ ಸಂತತಿಯವರ ಪಟ್ಟಿ: ಬೇತ್ಲೆಹೇಮಿನ
ನಿವಾಸಿಗಳು, ನೆಟೋಫಾ ಅಟರೋತ್, ಬೇತ್ಯೋ
ವಾಬ್, ಮಾನಹತಿಯ ಅರ್ಧಜನರು, ಚೊರ್ಗಯಿತರು,
55ಶಾಸ್ತ್ರಿಗಳ ಸಂತಾನ ಯಾಬೇಜ್, ತಿರ್ರಾತ್ಯ, ಶಿಮ್ಗಾತ್ಯ
ಮತ್ತು ಸೂಕಾತ್ಯ ಎಂಬ ಸ್ಥಳಗಳಲ್ಲಿ ವಾಸಿಸುವರು. ಇವರು
ಹಮಾತಿನಿಂದ ಬಂದ ಕೇನ್ಯರು. ಬೆತ್‌ರೇಕಾಬನ್ನು
ಹಮಾತನು ಸ್ಥಾಪಿಸಿದನು.

## ದಾವೀದನ ಗಂಡುಮಕ್ಕಳು

3 ದಾವೀದನ ಕೆಲವು ಗಂಡುಮಕ್ಕಳು ಹೆಬ್ರೋನಿನಲ್ಲಿ
ಹುಟ್ಟಿದರು. ದಾವೀದನ ಗಂಡುಮಕ್ಕಳು ಯಾರೆಂ
ದರೆ: ಅಮ್ನೋನನು ದಾವೀದನ ಚೊಚ್ಚಲಮಗನು. ಅವನ
ತಾಯಿ ಅಹೀನೋವಮಳು. ಈಕೆಯು ಇಜ್ರೇಲಿನವಳು.
ಎರಡನೆಯ ಮಗನು ಕರ್ಮೇಲ್ಯಳಾದ ಅಬೀಗೈಲಳ
ಮಗನಾದ ದಾನಿಯೇಲನು.
2ಅಬ್ಷಾಲೋಮನು ದಾವೀದನ ಮೂರನೆಯ
ಮಗನು. ಇವನ ತಾಯಿ ಮಾಕಳು. ಈಕೆಯು ಗೆಷೂರಿನ
ಅರಸನಾದ ತಲ್ಮೈಯ ಮಗಳು. ನಾಲ್ಕನೆಯವನು
ಅದೋನೀ ಯನು. ಇವನು ಹಗ್ಗೀತಳ ಮಗನು.
3ಶೆಫಟ್ಯನು ಐದನೆಯ ಮಗನು. ಇವನ ತಾಯಿಯ
ಹೆಸರು ಅಬೀಟಲ. ಆರನೆಯವನು ಇತ್ರಾಮ. ಇವನ
ತಾಯಿಯ ಹೆಸರು ಎಗ್ಲ. 4ಈ ಆರು ಮಂದಿ ಮಕ್ಕಳು
ದಾವೀದನಿಗೆ ಹೆಬ್ರೋನಿನಲ್ಲಿ ಹುಟ್ಟಿದರು. ದಾವೀದನು
ಅಲ್ಲಿ ಏಳುವರೆ ವರ್ಷ ಆಳಿದನು.
ದಾವೀದನು ಜೆರುಸಲೇಮಿನಲ್ಲಿ ಮೂವತ್ತುಮೂರು
ವರ್ಷ ಅರಸನಾಗಿದ್ದನು. 5ದಾವೀದನಿಗೆ ಜೆರುಸಲೇ
ಮಿನಲ್ಲಿ ಹುಟ್ಟಿದ ಮಕ್ಕಳು ಯಾರೆಂದರೆ:
ಬತ್ಷೇಬಳ ನಾಲ್ಕು ಮಂದಿ ಮಕ್ಕಳು: ಶಿಮ್ಮ,
ಶೋಬಾಬ್, ನಾತಾನ್ ಮತ್ತು ಸೊಲೊಮೋನನು.
ಬತ್ಷೇಬಳು ಅಮ್ಮೀಯೇಲನ ಮಗಳು. 6-8ಇವರಲ್ಲದೆ
ಅವನ ಬೇರೆ ಒಂಭತ್ತು ಮಕ್ಕಳು ಯಾರೆಂದರೆ: ಇಬ್ಹಾರ್,
ಎಲೀಷಾಮ, ಎಲೀಫೆಲೆಟ್, ನೋಗ, ನೆಫೆಗ್,
ಯಾಫೀಯ, ಎಲೀಷಾಮ, ಎಲ್ಯಾದ ಮತ್ತು ಎಲೀಫೆ–
ಲೆಟ್. 9ಇವರೆಲ್ಲಾ ದಾವೀದನ ಮಕ್ಕಳು. ತನ್ನ ಉಪ
ಪತ್ನಿಯರಿಂದ ದಾವೀ ದನಿಗೆ ಬೇರೆ ಗಂಡುಮಕ್ಕಳೂ
ಇದ್ದರು. ತಾಮಾರ್ ಎಂಬಾಕೆಯು ದಾವೀದನ ಮಗಳು.

## ದಾವೀದನ ನಂತರ ಯೆಹೂದ ಪ್ರಾಂತ್ಯದ ಅರಸರು

10ಸೊಲೊಮೋನನ ಮಗನು ರೆಹಬ್ಬಾಮ. ರೆಹಬ್ಬಾ
ಮನ ಮಗನು ಅಬೀಯ. ಅಬೀಯನ ಮಗನು ಆಸ.
ಆಸನ ಮಗನು ಯೆಹೋಷಾಫಾಟ್. 11ಯೆಹೋ
ಷಾಫಾಟನ ಮಗನು ಯೆಹೋರಾಮ್. ಯೆಹೋ
ರಾಮನ ಮಗನು ಅಹಜ್ಯ. ಅಹಜ್ಯನ ಮಗನು ಯೆಹೋ
ವಾಷ. 12ಯೆಹೋವಾಷನ ಮಗನು ಅಮಚ್ಯ. ಅಮಚ್ಯನ
ಮಗನು ಅಜರ್ಯ. ಅಜರ್ಯನ ಮಗನು ಯೋತಾಮ.

13ಯೋತಾಮನ ಮಗನು ಆಹಾಜ. ಆಹಾಜನ ಮಗನು
ಹಿಜ್ಕೀಯ. ಹಿಜ್ಕೀಯನ ಮಗನು ಮನಸ್ಸೆ. 14ಮನಸ್ಸೆಯ
ಮಗನು ಆಮೋನ. ಆಮೋನನ ಮಗನು ಯೋಷೀಯ.
15ಯೋಷೀಯನ ಗಂಡುಮಕ್ಕಳು ಯಾರೆಂದರೆ:
ಮೊದಲನೆಯವನು ಯೋಹಾನಾನ್; ಎರಡನೆಯವನು
ಯೆಹೋಯಾಕೀಮ; ಮೂರನೆಯವನು ಚಿದ್ಕೀಯ;
ನಾಲ್ಕನೆಯವನು ಶಲ್ಲೂಮ್.
16ಯೆಹೋಯಾಕೀಮನ ಗಂಡುಮಕ್ಕಳು ಯಾರೆಂ
ದರೆ: ಯೆಕೊನ್ಯ ಮತ್ತು ಚಿದ್ಕೀಯ.*

### ಬಾಬಿಲೋನ್ ದೇಶಕ್ಕೆ ಸೆರೆಹೋದ ಬಳಿಕ ದಾವೀದನ ವಂಶಾವಳಿ

17ಯೆಹೋಯಾಕೀಮನು ಬಾಬಿಲೋನಿಗೆ ಸೆರೆಒಯ್ದ
ಬಳಿಕ ಅವನಿಗೆ ಹುಟ್ಟಿದ ಗಂಡುಮಕ್ಕಳು: ಶೆಯಲ್ತೀ
ಯೇಲ್, 18ಮಲ್ಕೀರಾಮ್, ಪೆದಾಯ, ಶೆನಚ್ಚರ್,
ಯೆಕಮ್ಯ, ಹೋಷಾಮ ಮತ್ತು ನೆದಬ್ಯ.
19ಪೆದಾಯನ ಗಂಡುಮಕ್ಕಳು: ಜೆರುಬ್ಬಾಬೆಲ್ ಮತ್ತು
ಶಿಮ್ಮೀ. ಜೆರುಬ್ಬಾಬೆಲನ ಗಂಡುಮಕ್ಕಳು: ಮೆಷು
ಲ್ಲಾಮ್ ಮತ್ತು ಹನನ್ಯ. ಶೆಲೋಮೀತಳು ಅವರ ತಂಗಿ.
20ಜೆರುಬ್ಬಾಬೆಲನಿಗೆ ಐದು ಮಂದಿ ಬೇರೆ ಗಂಡು
ಮಕ್ಕಳಿದ್ದರು. ಅವರು ಯಾರೆಂದರೆ: ಹಷುಬ, ಓಹೆಲ್,
ಬೆರೆಕ್ಯ, ಹಸದ್ಯ ಮತ್ತು ಯೂಷಬ್ಹೆಸೆದ್.
21ಹನನ್ಯನ ಮಗನ ಹೆಸರು: ಪೆಲಟ್ಯ. ಪೆಲಟ್ಯನ ಮಗನು
ಯೆಶಾಯ. ಯೆಶಾಯನ ಮಗನು ರೆಫಾಯ. ರೆಫಾಯನ
ಮಗನು ಅರ್ನಾನ್, ಅರ್ನಾನನ ಮಗನು ಓಬದ್ಯ.
ಓಬದ್ಯನ ಮಗನು ಶೆಕನ್ಯ.
22ಶೆಕನ್ಯನ ಸಂತತಿಯವರು ಆರು ಮಂದಿ: ಶೆಮಾಯ
ಮತ್ತು ಅವನ ಗಂಡುಮಕ್ಕಳು, ಹಟ್ಟೂಷ್, ಇಗಾಲ್,
ಬಾರೀಹ, ನೆಯರ್ಯ ಮತ್ತು ಶಾಫಾಟ್. 23ನೆಯ
ರ್ಯನಿಗೆ ಮೂರು ಮಂದಿ ಗಂಡುಮಕ್ಕಳು: ಎಲ್ಯೋ
ಗೇನೈ, ಹಿಜ್ಕೀಯ ಮತ್ತು ಅಜ್ರೀಕಾಮ್.
24ಎಲ್ಯೋಗೇನೈಗೆ ಏಳು ಮಂದಿ ಗಂಡುಮಕ್ಕಳು.
ಯಾರೆಂದರೆ: ಹೋದವ್ಯ, ಎಲ್ಯಾಶೀಬ್, ಪೆಲಾಯ,
ಅಕ್ಕೂಬ್, ಯೋಹಾನಾನ್, ದೆಲಾಯ ಮತ್ತು ಅನಾನೀ.

### ಯೆಹೂದನ ಗಂಡುಮಕ್ಕಳ ಪಟ್ಟಿ

4 ಪೆರೆಚ್ ಹೆಚ್ರೋನ್, ಕರ್ಮಿ, ಹೂರ್ ಮತು
ಶೋಬಾಲರು.
2ಶೋಬಾಲನ ಮಗ ರೆವಾಯ. ರೆವಾಯನ ಮಗನು
ಯಹತ್. ಯಹತನ ಗಂಡುಮಕ್ಕಳು ಅಹೂಮೈ ಮತ್ತು
ಲಹದ್. ಅಹೂಮೈ ಮತ್ತು ಲಹದ್‌ರವರು ಚೊರ್ರ
ಸಂತತಿಯವರು.
3ಏಟಾಮನ ಗಂಡುಮಕ್ಕಳು ಯಾರೆಂದರೆ: ಇಜ್ರೆ
ಯೇಲ್, ಇಷ್ಮ ಮತ್ತು ಇಬ್ಬಾಷ್. ಇವರ ಸಹೋದರಿ
ಹಚೆಲೆಲ್‌ಪೋನೀ.
4ಪೆನೂವೇಲನು ಗೆದೋರನ ತಂದೆ; ಏಜೆರನು
ಹೂಷಾಹ್ಯನ ತಂದೆ.
ಇವರು ಹೂರನ ಗಂಡುಮಕ್ಕಳು. ಹೂರನು ಎಫ್ರಾ
ತಾಹಳ ಮೊದಲನೆಯ ಮಗನು. ಇವನೇ ಬೆತ್ಲೆಹೇಮ್ಯರ
ಮೂಲಪಿತೃ.
5ತೆಕೋವನ ತಂದೆಯಾದ ಅಷ್ಹೂರನಿಗೆ ಇಬ್ಬರು
ಹೆಂಡತಿಯರು. ಇವರ ಹೆಸರು ಹೆಲಾಹ ಮತ್ತು ನಾರ.
6ನಾರಳಲ್ಲಿ ಹುಟ್ಟಿದ ಗಂಡು ಮಕ್ಕಳು: ಅಹುಜ್ಜಾಮ್,
ಹೇಫೆರ್, ತೇಮಾನ್ ಮತ್ತು ಅಹಷ್ಟಾರ್ಯ. 7ಹೆಲಾಹಳ
ಗಂಡುಮಕ್ಕಳು: ಚೆರೆತ್, ಇಚ್ಹಾರ್, ಎತ್ನಾನ್ ಮತ್ತು
ಕೋಚ.
8ಕೋಚನು ಆನೂಬ್ ಮತ್ತು ಚೊಬೇಬನ ತಂದೆ.
ಕೋಚನು ಅಹರ್ಹೇಲ್ ವಂಶದವರ ಮೂಲಪಿತೃ.
ಅಹರ್ಹೇಲನು ಹಾರಮನ ಮಗನು.
9ಯಾಬೇಚನು ತುಂಬ ಒಳ್ಳೆಯ ವ್ಯಕ್ತಿಯಾಗಿದ್ದನು.
ಅವನು ತನ್ನ ಅಣ್ಣತಮ್ಮಂದಿರಿಗಿಂತ ಉತ್ತಮನಾಗಿದ್ದನು.
ಅವನ ತಾಯಿ, ‘‘ನಾನು ಅವನನ್ನು ಹೆರುವಾಗ ತುಂಬಾ
ನೋವನ್ನು ಅನುಭವಿಸಿದ್ದರಿಂದ ನಾನು ಅವನಿಗೆ
ಯಾಬೇಚ ಎಂದು ಹೆಸರಿಟ್ಟೆನು’’ ಎಂದು ಹೇಳಿದಳು.
10ಯಾಬೇಚನು ಇಸ್ರೇಲರ ದೇವರಿಗೆ ಹೀಗೆ ಪ್ರಾರ್ಥಿಸಿ
ದನು: ‘‘ದೇವರೇ, ನೀನು ನನ್ನನ್ನು ನಿಜವಾಗಿಯೂ
ಆಶೀರ್ವದಿಸು. ನನ್ನ ಪ್ರಾಂತ್ಯವನ್ನು ವಿಸ್ತರಿಸು. ನನ್ನ
ಬಳಿಯಲ್ಲಿಯೇ ಇದ್ದು ನನಗಾರೂ ನೋವು ಮಾಡದಂತೆ
ನೋಡಿಕೊಂಡು ನನ್ನನ್ನು ರಕ್ಷಿಸು’’ ಎಂಬ ಯಾಬೇಚನ
ಕೋರಿಕೆಯನ್ನು ದೇವರು ಕೇಳಿದನು.
11ಕೆಲೂಬನು ಶೂಹನ ಸಹೋದರ. ಕೆಲೂಬನ
ಮಗನು ಮೆಹೀರ್. ಮೆಹೀರನು ಎಷ್ಟೋನನ ತಂದೆ.
12ಎಷ್ಟೋನನು ಬೇತ್ರಾಫ, ಪಾಸೇಹ ಮತ್ತು ತೆಹಿನ್ನ ಇವರ
ತಂದೆ. ತೆಹಿನ್ನ ಇರ್‌ನಾಹಷನ ತಂದೆ. ಇವರೆಲ್ಲರೂ
ರೇಕಾಬದವರು.
13ಕೆನಜನ ಗಂಡುಮಕ್ಕಳು ಯಾರೆಂದರೆ: ಒತ್ನೀ
ಯೇಲ್ ಮತ್ತು ಸೆರಾಯ. ಒತ್ನೀಯೇಲನ ಮಕ್ಕಳು:
ಹತತ್ ಮತ್ತು ಮೆಯೋನೋತೈ.
14ಮೆಯೋನೋತೈ ಒಫ್ರಾಹನ ತಂದೆ.
ಸೆರಾಯನು ಯೋವಾಬನ ತಂದೆ. ಯೋವಾಬನು
ಗೇಹರಾಷೀಮ್ಯರ ಸ್ಥಾಪಕನು. ಇಲ್ಲಿಯವರು ನಿಪುಣ

---

**ಯೆಹೋಯಾಕೀಮನ … ಚಿದ್ಕೀಯ** ಇದನ್ನು ಎರಡು ರೀತಿಯಲ್ಲಿ ಅರ್ಥಮಾಡಿಕೊಳ್ಳಬಹುದು. 1)‘‘ಈ ಚಿದ್ಕೀಯನು ಯೆಹೋಯಾಕೀಮನ ಮಗನು ಮತ್ತು ಯೆಕೊನ್ಯನ ಸಹೋದರನು.’’ 2)‘‘ಈ ಚಿದ್ಕೀಯನು ಯೆಕೊನ್ಯನ ಮಗನು ಮತ್ತು ಯೆಹೋಯಾಕೀಮನ ಮೊಮ್ಮಗನು.’’

ಕುಶಲ ಕೆಲಸಗಾರರಾಗಿದ್ದುದರಿಂದ ಅವರಿಗೆ ಈ ಹೆಸರು ಬಂದಿತು.

15ಕಾಲೇಬನು ಯೆಫುನ್ನೆಯ ಮಗನು. ಕಾಲೇಬನ ಗಂಡುಮಕ್ಕಳು: ಈರು, ಏಲ, ನಾಮ್ ಏಲನ ಮಗಲ ಹೆಸರು ಕೆನಜ್. 16ಯೆಹಲ್ಲೆಲೇಲನ ಗಂಡುಮಕ್ಕಳು ಯಾರೆಂದರೆ: ಜೀಪ್, ಜೀಫಾ, ತೀರ್ಯ ಮತ್ತು ಅಸರೇಲ್.

17-18ಎಜ್ರನ ಗಂಡುಮಕ್ಕಳು ಯಾರೆಂದರೆ: ಯೆತೆರ್, ಮೆರೆದ್, ಏಫೆರ್, ಯಾಲೋನ್. ಮೆರೆದನ ಗಂಡು ಮಕ್ಕಳು: ಮಿರ್ಯಾಮ್, ಶಮ್ಮೈ ಮತ್ತು ಇಷ್ಬಹ. ಇಷ್ಬಹನ ಮಗ ಎಷ್ಟೆಮೋ. ಮೆರೆದನಿಗೆ ಈಜಿಪ್ಟಿನ ಹೆಂಡತಿ ಯಿದ್ದಳು. ಅವಳಲ್ಲಿ ಯೆರೆದ್, ಹೆಬೆರ್ ಮತ್ತು ಯೆಕೂತೀಯೇಲ್ ಎಂಬ ಗಂಡುಮಕ್ಕಳು ಹುಟ್ಟಿದರು. ಯೆರೆದನು ಗೆದೋರ್ಯನ ತಂದೆ. ಹೆಬೆರನು ಸೋಕೋ ನನ ತಂದೆ; ಯೆಕೊತೀಯೇಲನು ಜಾನೋಹನ ತಂದೆ. ಇವರು ಬಿತ್ಯಳ ಮಕ್ಕಳು; ಬಿತ್ಯಳು ಫರೋಹನ ಮಗಳು. ಈಕೆಯೇ ಮೆರೆದನ ಈಜಿಪ್ಟಿನ ಹೆಂಡತಿ.

19ಮೆರೆದನ ಹೆಂಡತಿಯು ನೆಹಮನ ತಂಗಿ. ಮೆರೆದನ ಹೆಂಡತಿಯು ಯೂದಾಯದಿಂದ ಬಂದವಳು. ಮೆರೆದನ ಹೆಂಡತಿಯ ಗಂಡುಮಕ್ಕಳು: ಕೆಯೀಲ ಮತ್ತು ಎಷ್ಟೆಮೋ ಗೋತ್ರಗಳ ಮೂಲಪಿತೃಗಳು. ಕೆಯೀಲನು ಗರ್ಮ್ಯರಿಗೆ ಸೇರಿದವನು ಮತ್ತು ಎಷ್ಟೆಮೋವನು ಮಾಕಾತ್ಯರಿಗೆ ಸೇರಿದವನು.

20ಶೀಮೋನನ ಮಕ್ಕಳು ಯಾರೆಂದರೆ: ಅಮ್ನೋನ್, ರಿನ್ನ, ಬೆನ್ಹಾನಾನ್ ಮತ್ತು ತೀಲೋನ್.

ಇಷ್ಷೀಯ ಮಕ್ಕಳು: ಜೋಹೇತ್ ಮತ್ತು ಬೆನ್ ಜೋಹೇತ್.

21-22ಶೇಲನು ಯೆಹೂದನ ಮಗನು. ಶೇಲನ ಮಕ್ಕಳು: ಏರ್, ಲದ್ದ, ಯೊಕೀಮ್, ಕೋಜೇಬದ ಜನರು, ಯೋವಾಷ್ ಮತ್ತು ಸಾರಾಫ್. ಏರನ ಮಗನು ಲೇಕಾಹ್ಯ. ಲದ್ದನು ಮರೇಷನ ತಂದೆ ಮತ್ತು ಬೇತಷ್ಬೇಯದ್, ಬಟ್ಟೆ ನೇಕಾರರ ಮೂಲಪಿತೃ. ಯೋವಾಷ್ ಮತ್ತು ಸಾರಾಫ್ ಮೋವಾಬ್ಯರ ಸ್ತ್ರೀಯ ರನ್ನು ಮದುವೆ ಮಾಡಿಕೊಂಡು ಬೇತ್ಲೆಹೇಮಿಗೆ ಹಿಂತಿ ರುಗಿದರು. ಈ ಕುಟುಂಬದ ಕುರಿತಾದ ಬರಹಗಳು ಪುರಾತನ ಕಾಲದ್ದು. 23ಶೇಲನ ಮಕ್ಕಳು ಮಣ್ಣಿನಿಂದ ವಸ್ತುಗಳನ್ನು ತಯಾರಿಸುತ್ತಿದ್ದರು. ನೆಟಾಯಿಮ್ ಮತ್ತು ಗೆದೇರ ಎಂಬ ಸ್ಥಳಗಳಲ್ಲಿ ವಾಸವಾಗಿದ್ದ ಅವರು ಅರಸನಿಗೋಸ್ಕರ ಕೆಲಸ ಮಾಡುತ್ತಿದ್ದರು.

### ಸಿಮೆಯೋನನ ಗಂಡುಮಕ್ಕಳು

24ಸಿಮೆಯೋನನ ಗಂಡುಮಕ್ಕಳು ಯಾರೆಂದರೆ: ನೆಮೂವೇಲ್, ಯಾಮೀನ್, ಯಾರೀದ್, ಜೆರಹ ಮತ್ತು ಸೌಲ. 25ಸೌಲನ ಮಗನು ಶಲ್ಲುಮ. ಶಲ್ಲುಮನ ಮಗನು ಮಿಬ್ಸಾಮ್; ಮಿಬ್ಸಾಮನ ಮಗನು ಮಿಷ್ಮ.

26ಮಿಷ್ಮನ ಮಗನು ಹಮ್ಮೂವೇಲ. ಹಮ್ಮೂವೇಲನ ಮಗನು ಜಕ್ಕೂರ್. ಜಕ್ಕೂರನ ಮಗನು ಶಿಮ್ಮೀ. 27ಶಿಮ್ಮೀಗೆ ಹದಿನಾರು ಮಂದಿ ಗಂಡುಮಕ್ಕಳೂ ಆರು ಮಂದಿ ಹೆಣ್ಣುಮಕ್ಕಳೂ ಇದ್ದರು. ಶಿಮ್ಮೀಯ ಸಹೋ ದರರಿಗೆ ಹೆಚ್ಚು ಮಕ್ಕಳಿರಲಿಲ್ಲ. ಇವರ ಸಂತತಿಯವರ ಸಂಖ್ಯೆಯು ಯೆಹೂದದ ಸಂತತಿಯವರಷ್ಟು ಹೆಚ್ಚಾಗಿ ರಲಿಲ್ಲ.

28ಶಿಮ್ಮಿಯ ಗಂಡುಮಕ್ಕಳು ಬೇರ್ಷೆಬ, ಮೋಲಾದ್, ಹಚರ್ ಷೂವಾಲ್, 29ಬಿಲ್ಹ, ಎಚೆಮ್, ತೋಲಾಬ್, 30ಬೆತೂವೇಲ್, ಹೊರ್ಮ, ಚಿಕ್ಲಗ್, 31ಬೇತ್ಮರ್ಕಾ ಬೋತ್, ಹಚರ್ ಸೂಸೀಮ್, ಬೇತ್ಬಿರೀ ಮತ್ತು ಶಾರಯಿಮ್ ಊರುಗಳಲ್ಲಿ ವಾಸಿಸಿದರು. ದಾವೀದನು ಅರಸನಾಗುವ ತನಕ ಅವರು ಆ ಊರುಗಳಲ್ಲಿ ನೆಲೆಸಿ ದರು. 32ಈ ಪಟ್ಟಣಗಳ ಹತ್ತಿರವಿರುವ ಐದು ಹಳ್ಳಿಗಳು ಯಾವುವೆಂದರೆ: ಏಟಾಮ್, ಅಯಿನ್, ರಿಮ್ಮೋನ್, ತೋಕೆನ್ ಮತ್ತು ಆಷಾನ್. 33ಬೇರೆ ಹಳ್ಳಿಗಳು ಬಾಲ್ ತನಕವೂ ಇದ್ದವು. ಅವರು ವಾಸವಾಗಿದ್ದದ್ದು ಅಲ್ಲಿಯೇ. ಇದಲ್ಲದೆ ಅವರು ತಮ್ಮ ವಂಶದ ಚರಿತ್ರೆಯನ್ನೂ ಬರೆದಿಟ್ಟರು.

34-38ಅವರ ಕುಲಪ್ರಧಾನರು ಯಾರೆಂದರೆ: ಮೊಷೋ ಬಾಬ್, ಯಮ್ಲೇಕ್, ಯೋಷ (ಅಮಚ್ಯನ ಮಗ), ಯೋವೇಲ್, ಯೇಹೂ (ಯೇಹೂವು ಯೊಷಿಬ್ಯನ ಮಗ, ಸೆರಾಯನ ಮೊಮ್ಮಗ ಮತ್ತು ಅಸಿಯೇಲನ ಮರಿಮಗ.), ಎಲ್ಯೋವೇನೈ, ಯಾಕೋಬ, ಯೆಷೋ ಹಾಮ, ಅಸಾಯ, ಆದೀಯೇಲ್, ಯೆಸೀಮಿಯೇಲ್, ಬೆನಾಯ ಮತ್ತು ಜೀಜ (ಶಿಫ್ಪಿಯನ ಮಗ.) ಶಿಪ್ಪಿಯು ಅಲ್ಲೋನನ ಮಗನು; ಅಲ್ಲೋನನು ಯೆದಾಯನ ಮಗನು; ಯೆದಾಯನು ಶಿಮ್ರಿಯ ಮಗನು; ಶಿಮ್ರಿಯು ಶೆಮಾಯನ ಮಗನು.

ಈ ಕುಲದ ಜನರು ಬಹುಸಂಖ್ಯಾತರಾಗಿ ಹೆಚ್ಚಿದರು. 39ಗೆದೋರ್ ಊರಿನ ಹೊರಭಾಗದಲ್ಲಿರುವ ತಗ್ಗಿನ ಪೂರ್ವದಿಕ್ಕಿನಲ್ಲಿ ಅವರು ನೆಲೆಸಿದರು. ತಮ್ಮ ದನಕುರಿ ಗಳಿಗಾಗಿ ಹುಲ್ಲುಗಾವಲನ್ನು ಹುಡುಕಿಕೊಂಡು ಅವರು ಅಲ್ಲಿಗೆ ಹೋಗಿದ್ದರು. 40ಅಲ್ಲಿ ಫಲವತ್ತಾದ ಭೂಮಿ ಯನ್ನೂ ಹಸಿರು ಹುಲ್ಲುಗಾವಲನ್ನೂ ಕಂಡು ಅಲ್ಲಿಯೇ ನೆಲೆಸಿದರು. ಆ ಪ್ರದೇಶವು ಪ್ರಶಾಂತವಾಗಿತ್ತು. ಹಿಂದಿನ ಕಾಲದಲ್ಲಿ ಹಾಮನ ಸಂತತಿಯವರು ಅಲ್ಲಿ ನೆಲೆಸಿದ್ದರು. 41ಯೆಹೂದದ ಅರಸನಾಗಿದ್ದ ಹಿಜ್ಕೀಯನ ಕಾಲದಲ್ಲಿ ಇದು ಆಯಿತು. ಇವರು ಗೆದೋರಿಗೆ ಬಂದು ಹಾಮ್ಯನ ಸಂತತಿಯವರೊಂದಿಗೆ ಯುದ್ಧಮಾಡಿ ಅವರ ಗುಡಾರ ಗಳನ್ನು ನಾಶಮಾಡಿದರು. ಅಲ್ಲದೆ ಮೆಗೂಗ್ಯರ

ವಿರುದ್ಧವಾಗಿ ಯುದ್ಧಮಾಡಿ ಅಲ್ಲಿ ನೆಲೆಸಿದರು. ಇವರು
ಮೆಗೂನ್ಯರನ್ನೆಲ್ಲಾ ನಾಶಮಾಡಿದರು. ಇಂದಿನವರೆಗೂ
ಮೆಗೂನ್ಯರಲ್ಲಿ ಯಾರೂ ಉಳಿದಿಲ್ಲ. ಹೀಗೆ ಆ ಸ್ಥಳದಲ್ಲಿ
ಅವರು ನೆಲೆಸಿದರು; ಯಾಕೆಂದರೆ ಅವರ ಪಶುಗಳಿಗೆ ಅಲ್ಲಿ
ಸಾಕಷ್ಟು ಹುಲ್ಲಿತ್ತು.

42ಸಿಮೆಯೋನನ ಕುಲದ ಐನೂರು ಮಂದಿ
ಸೇಯೀರ್ ಬೆಟ್ಟ ಪ್ರಾಂತ್ಯಕ್ಕೆ ಹೋದರು. ಇಷ್ಷೀಯ
ಗಂಡುಮಕ್ಕಳು ಈ ಗುಂಪಿನ ನಾಯಕರಾಗಿದ್ದರು. ಅವರು
ಯಾರೆಂದರೆ: ಪೆಲಟ್ಯ, ನೆಗರ್ಯ, ರೆಫಾಯ ಮತ್ತು
ಉಜ್ಜೀಯೇಲ್. ಅಲ್ಲಿ ವಾಸಿಸುವ ಜನರೊಂದಿಗೆ ಇವರು
ಕಾದಾಡಿದರು. 43ಆಗ ಅಲ್ಲಿ ಸ್ವಲ್ಪವೇ ಮಂದಿ ಅಮಾಲೇ
ಕ್ಯರು ವಾಸಿಸುತ್ತಿದ್ದರು. ಈ ಸಿಮೆಯೋನರು ಅವರನ್ನು
ಕೊಂದು ಆ ಸ್ಥಳದಲ್ಲಿ ನೆಲೆಸಿದರು. ಇಂದಿನವರೆಗೂ
ಸಿಮೆಯೋನರು ಅಲ್ಲಿ ನೆಲೆಸಿದ್ದಾರೆ.

### ರೂಬೇನನ ಸಂತತಿಯವರು

5 1-3ರೂಬೇನನು ಇಸ್ರೇಲನ ಚೊಚ್ಚಲಮಗ. ಅವನು
ಚೊಚ್ಚಲಮಗನಿಗೆ ಸಿಗಬೇಕಾಗಿದ್ದ ಹಕ್ಕುಗಳನ್ನು
ಪಡೆದುಕೊಳ್ಳಬೇಕಾಗಿತ್ತು. ಆದರೆ ಅವನು ತನ್ನ ತಂದೆಯ
ಉಪಪತ್ನಿಯೊಡನೆ ಸಂಭೋಗಿಸಿದ್ದರಿಂದ ಅವನ ಹಕ್ಕು
ಗಳು ಯೋಸೇಫನ ಮಕ್ಕಳಿಗೆ ದೊರೆತವು. ಆದ್ದರಿಂದ
ವಂಶಾವಳಿಯಲ್ಲಿ ಚೊಚ್ಚಲಮಗನ ಸ್ಥಾನ ಅವನಿಗೆ
ದೊರೆಯಲಿಲ್ಲ. ಯೆಹೂದನು ತನ್ನ ಎಲ್ಲಾ ಸಹೋದರ
ರಿಗಿಂತ ಬಲಾಢ್ಯನಾದನು. ಆದ್ದರಿಂದ ಅವನ ಕುಲ
ದಿಂದಲೇ ನಾಯಕರುಗಳು ಬಂದರು. ಆದರೆ ಚೊಚ್ಚ
ಲಮಗನಿಗೆ ಸಿಗಬೇಕಾಗಿದ್ದ ಇತರ ಹಕ್ಕುಗಳು
ಯೋಸೇಫನ ಮಕ್ಕಳಿಗೆ ದೊರೆತವು. ರೂಬೇನನ ಮಕ್ಕಳು
ಯಾರೆಂದರೆ: ಹನೋಕ್, ಫಲ್ಲೂ, ಹೆಚ್ರೋನ್ ಮತ್ತು
ಕರ್ಮೀ.

4ಇವರು ಯೋವೇಲನ ಸಂತತಿಯವರು: ಶೆಮಾಯನು
ಯೋವೇಲನ ಮಗ. ಗೋಗನು ಶೆಮಾಯನ ಮಗ.
ಶಿಮ್ಮಿಯು ಗೋಗನ ಮಗ. 5ಶಿಮ್ಮಿಯ ಮಗನು ಮೀಕ.
ಮೀಕನ ಮಗ ರೆವಾಯ. ರೆವಾಯನ ಮಗನು
ಬಾಳ್‌ಮಯೊನ್. 6ಬಾಳ್‌ಮಯೊನನ ಮಗನು ಬೇರ.
ಅಶ್ಶೂರದ ಅರಸನಾದ ತಿಗ್ಲತ್ಪಿಲೆಸರನು ಬೇರನನ್ನು
ಅವನ ಮನೆಯಿಂದ ಹೊರಡಿಸಿದನು; ಬೇರನು ಅವನ
ಸೆರೆಯಾಳಾದನು. ಬೇರನು ರೂಬೇನ್ ಕುಲದ
ಪ್ರಧಾನನಾಗಿದ್ದನು.

7ಯೋವೇಲನ ಮತ್ತು ಅವನ ಸಂತತಿಯವರೆಲ್ಲರ
ವಿಷಯವಾಗಿ ಸಂತಾನಚರಿತ್ರೆಯಲ್ಲಿ ಬರೆಯಲ್ಪಟ್ಟಿರು
ತ್ತದೆ: ಅವನ ಚೊಚ್ಚಲಮಗನು ಯೆಗೀಯೇಲ್,
ಅನಂತರ ಹುಟ್ಟಿದವರು ಜೆಕರ್ಯ ಮತ್ತು ಬೆಳ.
8ಆಜಾಜನ ಮಗನು ಬೆಳ. ಆಜಾಜನು ಶೆಮಯನ ಮಗ,
ಶೆಮಯನು ಯೋವೇಲನ ಮಗನು. ಇವರೆಲ್ಲರೂ
ನೆಬೋ ಮತ್ತು ಬಾಳ್ಮೆಯೋನ್ ಪ್ರಾಂತ್ಯದ ಅರೋ
ಯೇರ್ ಸುತ್ತಮುತ್ತ ವಾಸಿಸಿದರು. 9ಬೆಳನ ಜನರು
ಯೂಫ್ರೇಟೀಸ್ ನದಿಯ ಸಮೀಪದಲ್ಲಿರುವ ಮರು
ಭೂಮಿಯವರೆಗೂ ನೆಲೆಸಿದರು. ಅವರಿಗೆ ಹೆಚ್ಚಿನ
ಸಂಖ್ಯೆಯಲ್ಲಿ ದನಕರುಗಳು ಇದ್ದುದರಿಂದ ಗಿಲ್ಯಾದ್
ಪ್ರಾಂತ್ಯದಲ್ಲಿಯೇ ನೆಲೆಸಿದರು. 10ಸೌಲನು ಅರಸನಾಗಿದ್ದ
ಸಮಯದಲ್ಲಿ ಬೆಳನ ಜನರು ಹಗ್ರೀಯರೊಂದಿಗೆ
ಯುದ್ಧಮಾಡಿ ಅವರ ಗುಡಾರಗಳಲ್ಲಿ ವಾಸಮಾಡಿದರು.
ಆ ಗುಡಾರಗಳಲ್ಲಿ ವಾಸಮಾಡುತ್ತಾ ಗಿಲ್ಯಾದಿನ ಪೂರ್ವ
ಪ್ರಾಂತ್ಯದಲ್ಲೆಲ್ಲಾ ಸಂಚರಿಸಿದರು.

### ಗಾದನ ಸಂತತಿಯವರು

11ರೂಬೇನ್ಯರು ವಾಸಿಸಿದ್ದ ಪ್ರಾಂತ್ಯದ ಪಕ್ಕದಲ್ಲಿಯೇ
ಗಾದನ ಕುಲದವರು ವಾಸಿಸಿದರು. ಇವರು ಬಾಷಾನಿನ
ಪ್ರದೇಶದಲ್ಲಿ ಸಾಲೆಖ ಪಟ್ಟಣದವರೆಗೂ ನೆಲೆಸಿದರು.
12ಯೋವೇಲನೇ ಬಾಷಾನಿನ ಮೊದಲನೇ ಪ್ರಧಾನನು.
ಇವನ ನಂತರ ಶಾಫಾಮ ಪ್ರಧಾನನಾದನು. ಆಮೇಲೆ
ಯನ್ನೈ ಪ್ರಧಾನನಾದನು. 13ಅವರ ಕುಟುಂಬದ ಏಳು
ಮಂದಿ ಸಹೋದರರು ಯಾರೆಂದರೆ: ಮೀಕಾಯೇಲ್,
ಮೆಷುಲ್ಲಾಮ್, ಶೆಬ, ಯೋರೈ, ಯಕ್ಕಾನ್, ಜೀಯ
ಮತ್ತು ಏಬೆರ್. 14ಇವರು ಅಬೀಹೈಲನ ಸಂತತಿಯವರು.
ಅಬೀಹೈಲನು ಹೂರೀಯ ಮಗ. ಹೂರೀಯು
ಯಾರೋಹನ ಮಗ. ಯಾರೋಹನು ಗಿಲ್ಯಾದನ ಮಗ.
ಗಿಲ್ಯಾದನು ಮೀಕಾಯೇಲನ ಮಗನು. ಮೀಕಾ
ಯೇಲನು ಯೆಷೀಷೈಯನ ಮಗನು.

ಯೇಷೀಷೈ ಯೆಹ್ದೋವಿನ ಮಗನು. ಯೆಹ್ದೋವನ
ಅಹೀಬೂಜನ ಮಗನು. 15ಅಬ್ದೀಯೇಲನ ಮಗನು
ಅಹೀಬೂಜನು. ಅಬ್ದೀಯೇಲನು ಗೂನೀಯ ಮಗನು.
ಅಹೀಬೂಜನು ಕುಟುಂಬ ಪ್ರಧಾನನಾಗಿದ್ದನು.

16ಗಿಲ್ಯಾದ್ ಪ್ರಾಂತ್ಯದಲ್ಲಿ ಗಾದ್ ಕುಟುಂಬದ ಜನರು
ವಾಸಿಸಿದರು. ಅವರು ಬಾಷಾನ್ ಪ್ರಾಂತ್ಯದಲ್ಲಿಯೂ
ಅದರ ಸುತ್ತಮುತ್ತಲಿದ್ದ ಊರುಗಳಲ್ಲಿಯೂ ಶಾರೋನ್
ಪ್ರಾಂತ್ಯದ ಹುಲ್ಲುಗಾವಲುಗಳ ಗಡಿಗಳವರೆಗೂ ನೆಲೆಸಿ
ದರು. 17ಯೋತಾಮ ಮತ್ತು ಯಾರೊಬ್ಬಾಮನ ಕಾಲ
ದಲ್ಲಿ ಇವರ ಹೆಸರುಗಳನ್ನೆಲ್ಲಾ ಗಾದ್ಯರ ಸಂತಾನ ಚರಿತ್ರೆ
ಯಲ್ಲಿ ಬರೆಯಲ್ಪಟ್ಟಿರುತ್ತದೆ. ಯೋತಾಮನು ಯೆಹೂ
ದದ ಅರಸನಾಗಿದ್ದನು ಮತ್ತು ಯಾರೊಬ್ಬಾಮನು
ಇಸ್ರೇಲರ ಅರಸನಾಗಿದ್ದನು.

### ಶೂರರಾದ ಯುದ್ಧವೀರರು

18ರೂಬೇನ್ ಮತ್ತು ಗಾದ್ ಕುಲಗಳಲ್ಲಿ ಮತ್ತು ಮನ
ಸ್ಸೆಯ ಅರ್ಧಕುಲದವರಲ್ಲಿ ನಲವತ್ತನಾಲ್ಕು ಸಾವಿರದ

ಏಳುನೂರ ಅರವತ್ತು ಮಂದಿ ಯುದ್ಧವೀರರಿದ್ದರು.
ಇವರೆಲ್ಲಾ ಖಡ್ಗ ಗುರಾಣಿಗಳನ್ನೂ ಬಿಲ್ಲುಬಾಣಗಳನ್ನೂ
ಉಪಯೋಗಿಸುವದರಲ್ಲಿ ನಿಪುಣರಾಗಿದ್ದರು. [19]ಅವರು
ಹಗ್ರೀಯರೊಂದಿಗೂ ಯೆಟೂರ್, ನಾಫೀಷ್ ಮತ್ತು
ನೋದಾಬ್ ಊರಿನವರೊಂದಿಗೂ ಯುದ್ಧ ಮಾಡಿ
ದರು. [20]ರೂಬೇನ್, ಮನಸ್ಸೆ, ಗಾದ್ ಕುಲಗಳ
ಯೋಧರು ಯುದ್ಧಮಾಡುವಾಗ ದೇವರಲ್ಲಿ ಪ್ರಾರ್ಥಿ
ಸಿದರು. ಅವರು ದೇವರ ಮೇಲೆ ಭರವಸೆಯಿಟ್ಟು
ಸಹಾಯಕ್ಕಾಗಿ ಬೇಡಿಕೊಂಡದ್ದರಿಂದ ದೇವರು ಅವರಿಗೆ
ಜಯವನ್ನು ಕೊಟ್ಟನು. [21]ವೈರಿಗಳಲ್ಲಿದ್ದ ಎಲ್ಲಾ ಪಶು
ಗಳನ್ನು ಅವರು ತಮ್ಮ ವಶಕ್ಕೆ ತೆಗೆದುಕೊಂಡರು. ಅವರು
ಐವತ್ತು ಸಾವಿರ ಒಂಟೆಗಳು, ಎರಡು ಲಕ್ಷದ ಐವತ್ತು
ಸಾವಿರ ಕುರಿಗಳು, ಎರಡು ಸಾವಿರ ಕತ್ತೆಗಳು ಅಲ್ಲದೆ
ಒಂದು ಲಕ್ಷ ಸೆರೆಯಾಳುಗಳನ್ನು ತೆಗೆದುಕೊಂಡರು.
[22]ದೇವರು ಅವರಿಗೆ ಜಯವನ್ನು ಕೊಟ್ಟಿದ್ದರಿಂದ ಹಗ್ರೀ
ಯರಲ್ಲಿ ಬಹಳ ಮಂದಿಯನ್ನು ಕೊಂದರು. ಆ
ಹಗ್ರೀಯರ ಪ್ರದೇಶದಲ್ಲಿ ರೂಬೇನ್, ಗಾದ್, ಮನಸ್ಸೆ
ಕುಲಗಳವರು ಸಹ ವಾಸಿಸಿದರು. ಬಾಬಿಲೋನಿನ
ಅರಸನು ಇಸ್ರೇಲರನ್ನು ಸೆರೆಹಿಡಿದು ಕೊಂಡೊಯ್ಯುವ
ತನಕ ಅವರು ಅಲ್ಲಿಯೇ ವಾಸಮಾಡಿದರು.

### ಮನಸ್ಸೆ ಸಂತತಿಯವರು

[23]ಮನಸ್ಸೆಯ ಅರ್ಧಕುಲದ ಜನರು ಬಾಷಾನ್
ಪ್ರದೇಶದಿಂದಿಡಿದು ಬಾಳ್‌ಹೆರ್ಮೋನ್, ಸೆನೀರ್
ಮತ್ತು ಹೆರ್ಮೋನ್ ಪರ್ವತ ಪ್ರಾಂತ್ಯದವರೆಗೂ ನೆಲೆಸಿ
ದರು. ಅವರ ಕುಲದ ಜನರು ಬಹು ಸಂಖ್ಯಾತರಾದರು.
[24]ಮನಸ್ಸೆಯ ಅರ್ಧಕುಲದ ಅಧಿಪತಿಗಳು ಯಾರೆಂ
ದರೆ: ಏಫೆರ್, ಇಷ್ಷೀ, ಎಲೀಯೇಲ್, ಅಜ್ರೀಯೇಲ್,
ಯೆರೆಮೀಯ, ಹೋದವ್ಯ, ಮತ್ತು ಯೆಹ್ದೀಯೇಲ್.
ಇವರೆಲ್ಲಾ ಬಲಾಢ್ಯರೂ ಧೈರ್ಯಶಾಲಿಗಳೂ ಆದ ವೀರ
ರಾಗಿದ್ದರು.
[25]ಆದರೆ ಆ ಅಧಿಪತಿಗಳು ತಮ್ಮ ಪೂರ್ವಿಕರು
ಆರಾಧಿಸುತ್ತಿದ್ದ ದೇವರನ್ನು ಬಿಟ್ಟು ಬೇರೆ ದೇವರುಗಳನ್ನು
ಪೂಜಿಸತೊಡಗಿ ತಮ್ಮ ದೇವರ ವಿರುದ್ಧವಾಗಿ ಪಾಪ
ಮಾಡಿದರು. ತಾವು ಸೋಲಿಸಿದ ಅನ್ಯಜನಾಂಗದವರ
ದೇವರುಗಳನ್ನು ಇವರು ಆರಾಧಿಸಿದರು.
[26]ಇಸ್ರೇಲರ ದೇವರು ಅಶ್ಶೂರ್ಯರ ರಾಜನಾದ ಪೂಲ್
(ತಿಗ್ಲತ್ಪಿಲೆಸರ್) ಅವರ ಮೇಲೆ ಯುದ್ಧಕ್ಕೆ ಹೋಗುವಂತೆ
ಮಾಡಿದನು. ಅವನು ಬಂದು ರೂಬೇನ್, ಗಾದ್ ಮತ್ತು
ಮನಸ್ಸೆಯ ಅರ್ಧ ಕುಲದವರೊಂದಿಗೆ ಯುದ್ಧ
ಮಾಡಿದನು. ಯುದ್ಧದಲ್ಲಿ ಅವರನ್ನು ಸೋಲಿಸಿ,
ಸೆರೆಹಿಡಿದು ಹಲಹ, ಹಾಬೋರ್, ಹಾರ ಮತ್ತು
ಗೋಜಾನ್ ನದಿಯ ಸಮೀಪದ ಸ್ಥಳಕ್ಕೆ ಕೈದಿಗಳನ್ನಾಗಿ
ಕೊಂಡೊಯ್ದನು. ಅಂದಿನಿಂದ ಇಂದಿನ ತನಕವೂ
ಇಸ್ರೇಲರು ಆ ಸ್ಥಳಗಳಲ್ಲಿ ವಾಸಮಾಡುತ್ತಿರುವರು.

### ಲೇವಿಯ ಸಂತತಿಯವರು

6 ಲೇವಿಯ ಗಂಡುಮಕ್ಕಳು: ಗೇರ್ಷೋನ್,
ಕೆಹಾತ್, ಮತ್ತು ಮೆರಾರೀ.
[2]ಕೆಹಾತನ ಗಂಡುಮಕ್ಕಳು: ಅಮ್ರಾಮ್, ಇಚ್ಹಾರ್,
ಹೆಬ್ರೋನ್ ಮತ್ತು ಉಜ್ಜೀಯೇಲ್.
[3]ಅಮ್ರಾಮನ ಮಕ್ಕಳು: ಆರೋನ, ಮೋಶೆ ಮತ್ತು
ಮಿರ್ಯಾಮಳು.
ಆರೋನನ ಮಕ್ಕಳು: ನಾದಾಬ್, ಅಬೀಹೂ, ಎಲ್ಲಾ
ಜಾರ್ ಮತ್ತು ಈತಾಮಾರ್. [4]ಎಲ್ಲಾಜಾರನ ಮಗನು
ಫೀನೆಹಾಸ. ಫೀನೆಹಾಸನ ಮಗನು ಅಬೀಷೂವ.
[5]ಅಬೀಷೂವನ ಮಗನು ಬುಕ್ಕೀ; ಬುಕ್ಕೀಯ ಮಗನು
ಉಜ್ಜೀ. [6]ಉಜ್ಜೀಯ ಮಗನು ಜೆರಹ್ಯ. ಜೆರಹ್ಯನ ಮಗನು
ಮೆರಾಯೋತ್. [7]ಮೆರಾಯೋತನ ಮಗನು ಅಮರ್ಯ.
ಅಮರ್ಯನ ಮಗನು ಅಹೀಟೂಬ. [8]ಅಹೀಟೂಬನ
ಮಗ ಚಾದೋಕ. ಚಾದೋಕನ ಮಗ ಅಹೀಮಾಚ.
[9]ಅಹೀಮಾಚನು ಅಜರ್ಯನ ತಂದೆ; ಅಜರ್ಯನ
ಮಗನು ಯೋಹಾನಾನ. [10]ಯೋಹಾನಾನನ ಮಗನು
ಅಜರ್ಯ. (ಸೊಲೊಮೋನನು ಜೆರುಸಲೇಮಿನಲ್ಲಿ
ಕಟ್ಟಿದ ದೇವಾಲಯದಲ್ಲಿ ಅಜರ್ಯನು ಮಹಾಯಾಜಕ
ನಾಗಿದ್ದನು.) [11]ಅಜರ್ಯನ ಮಗನು ಅಮರ್ಯ. ಅಮ
ರ್ಯನು ಅಹೀಟೂಬನ ತಂದೆ. [12]ಅಹೀಟೂಬನು
ಚಾದೋಕನ ತಂದೆ. ಚಾದೋಕನು ಶಲ್ಲೂಮನ ತಂದೆ.
[13]ಶಲ್ಲೂಮನು ಹಿಲ್ಕೀಯನ ತಂದೆ. ಹಿಲ್ಕೀಯನು
ಅಜರ್ಯನ ತಂದೆ. [14]ಅಜರ್ಯನು ಸೆರಾಯನ ತಂದೆ.
ಸೆರಾಯನು ಯೆಹೋಚಾದಾಕನ ತಂದೆ.
[15]ಯೆಹೂದ ಮತ್ತು ಜೆರುಸಲೇಮಿನ ಜನರು ಸೆರೆ
ಒಯ್ಯಲ್ಪಟ್ಟಾಗ ಯೆಹೋಚಾದಾಕನೂ ಅವರೊಂದಿಗೆ
ಪರದೇಶಕ್ಕೆ ಹೋಗಬೇಕಾಯಿತು. ಯೆಹೋವನು
ಯೆಹೂದ್ಯರನ್ನು ಮತ್ತು ಜೆರುಸಲೇಮಿನವರನ್ನು ಪರ
ದೇಶಕ್ಕೆ ಸೆರೆಯಾಳುಗಳಾಗಿ ಒಯ್ಯಲು ನೆಬೂಕದ್ನೆಚ್ಚರ
ನನ್ನು ಉಪಯೋಗಿಸಿದನು.

### ಲೇವಿಯ ಇತರ ಸಂತತಿಯವರು

[16]ಲೇವಿಯ ಗಂಡುಮಕ್ಕಳು: ಗೇರ್ಷೋಮ್,
ಕೆಹಾತ್ ಮತ್ತು ಮೆರಾರೀ.
[17]ಗೇರ್ಷೋಮನ ಗಂಡುಮಕ್ಕಳು: ಲಿಬ್ನೀ ಮತ್ತು
ಶಿಮ್ಮೀ. [18]ಕೆಹಾತನ ಗಂಡುಮಕ್ಕಳು: ಅಮ್ರಾಮ್,
ಇಚ್ಹಾರ್, ಹೆಬ್ರೋನ್ ಮತ್ತು ಉಜ್ಜೀಯೇಲ್.
[19]ಮೆರಾರಿಯ ಗಂಡುಮಕ್ಕಳು: ಮಹ್ಲೀ ಮತ್ತು
ಮುಷೀ.

ಇತರ ಲೇವಿ ಕುಲದ ಕುಟುಂಬಗಳ ಪಟ್ಟಿ ಇಲ್ಲಿದೆ. ಈ
ಪಟ್ಟಿಯಲ್ಲಿ ತಂದೆಗಳ ಹೆಸರನ್ನು ಮೊದಲು ತಿಳಿಸಿ, ಅವರ
ಗಂಡುಮಕ್ಕಳ ಹೆಸರನ್ನು ನಂತರ ತಿಳಿಸಲಾಗಿದೆ.

20ಗೇರ್ಷೋಮನ ಸಂತತಿಯವರು: ಲಿಬ್ನೀಯು
ಗೇರ್ಷೋಮನ ಮಗನು. ಲಿಬ್ನೀಯ ಮಗ ಯಹತ್;
ಯಹತನ ಮಗ ಜಿಮ್ಮ. 21ಜಿಮ್ಮನ ಮಗನು ಯೋವಾಹ.
ಯೋವಾಹನ ಮಗ ಇದ್ದೋ. ಜೆರಹನು ಇದ್ದೋವಿನ
ಮಗನು. ಜೆರಹನ ಮಗನು ಯೆವತ್ರೈ.

22ಕೆಹಾತನ ಸಂತತಿಯವರು: ಕೆಹಾತನ ಮಗ ಅಮ್ಮೀ
ನಾದಾಬ್. ಅಮ್ಮೀನಾದಾಬನ ಮಗ ಕೋರಹ. ಕೋರ
ಹನ ಮಗನು ಅಸ್ಸೀರ್.

23ಅಸ್ಸೀರನ ಮಗನು ಎಲ್ಕಾನ. ಎಲ್ಕಾನನ ಮಗನು
ಎಬ್ಯಾಸಾಫ್. ಎಬ್ಯಾಸಾಫನ ಮಗನು ಅಸ್ಸೀರ್. 24ಅಸ್ಸೀ
ರನ ಮಗನು ತಹತ. ಊರೀಯೇಲ್ ತಹತನ ಮಗನು.
ಉಜ್ಜೀಯನು ಊರೀಯೇಲನ ಮಗನು. ಸೌಲನು
ಉಜ್ಜೀಯನ ಮಗನು.

25ಎಲ್ಕಾನನ ಗಂಡುಮಕ್ಕಳು: ಅಮಾಸೈ ಮತ್ತು
ಅಹೀಮೋತ್. 26ಚೋಫೈ ಎಲ್ಕಾನನ ಮಗನು. ನಹತನು
ಚೋಫೈಯ ಮಗನು. 27ನಹತನ ಮಗ ಎಲೀಯಾಬ್.
ಯೆರೋಹಾಮನು ಎಲೀಯಾಬನ ಮಗನು. ಯೆರೋ
ಹಾಮನ ಮಗನು ಎಲ್ಕಾನ. ಸಮುವೇಲನು ಎಲ್ಕಾನನ
ಮಗನು.

28ಸಮುವೇಲನ ಗಂಡುಮಕ್ಕಳು: ಯೋವೇಲ್ ಮತ್ತು
ಅಬೀಯ. 29ಮೆರಾರೀಯ ಗಂಡುಮಕ್ಕಳು: ಮೆರಾ
ರೀಯ ಮಗ ಮಹ್ಲೀ; ಮಹ್ಲೀಯ ಮಗನು ಲಿಬ್ನೀ.
ಲಿಬ್ನೀಯ ಮಗ ಶಿಮ್ಮೀ; ಶಿಮ್ಮೀಯನ ಮಗ ಉಜ್ಜ;
30ಉಜ್ಜನ ಮಗ ಶಿಮ್ಮಾ; ಶಿಮ್ಮಾನ ಮಗ ಹಗ್ಗೀಯ.
ಹಗ್ಗೀಯನ ಮಗ ಅಸಾಯ.

## ದೇವಾಲಯದ ಗಾಯಕರು

31ದೇವದರ್ಶನಗುಡಾರದ ಮಹಾಪವಿತ್ರಸ್ಥಳದಲ್ಲಿ
ಒಡಂಬಡಿಕೆಯ ಪೆಟ್ಟಿಗೆಯನ್ನು ಇಟ್ಟ ಬಳಿಕ ಅರಸನಾದ
ದಾವೀದನು ಗಾಯಕರನ್ನು ಆರಿಸಿದನು. 32ಪವಿತ್ರ
ಗುಡಾರದಲ್ಲಿ ಹಾಡುವುದೇ ಇವರ ದೇವರ ಸೇವೆ
ಯಾಗಿತ್ತು. ಸೊಲೊಮೋನನು ಜೆರುಸಲೇಮಿನಲ್ಲಿ
ದೇವಾಲಯವನ್ನು ಕಟ್ಟುವ ತನಕ ಇವರು ಗುಡಾರದಲ್ಲಿ
ತಮಗೆ ಹೇಳಿರುವ ಪ್ರಕಾರವೇ ಸೇವೆ ಮಾಡಿದರು.

33ಗಾಯನದ ಮೂಲಕ ಸೇವೆಮಾಡಿದ ತಂದೆಗಳ
ಮತ್ತು ಅವರ ಗಂಡುಮಕ್ಕಳ ಪಟ್ಟಿ: ಕೆಹಾತ್ಯನ ಸಂತತಿ
ಯವರಿಂದ ಗಾಯಕನಾದ ಹೇಮಾನ. ಇವನು
ಯೋವೇಲನ ಮಗ. ಯೋವೇಲನು ಸಮುವೇಲನ ಮಗ.
34ಸಮುವೇಲನು ಎಲ್ಕಾನನ ಮಗ. ಎಲ್ಕಾನನು ಯೆರೋ
ಹಾಮನ ಮಗ. ಯೆರೋಹಾಮನು ಎಲೀಯೇಲನ
ಮಗ. ಎಲೀಯೇಲನು ತೋಹನ ಮಗ. 35ತೋಹನು
ಚೂಫನ ಮಗ. ಚೂಫನು ಎಲ್ಕಾನನ ಮಗ. ಎಲ್ಕಾನನು
ಮಹತನ ಮಗ. ಮಹತನು ಅಮಾಸೈಯ ಮಗ.
36ಅಮಾಸೈಯು ಎಲ್ಕಾನನ ಮಗ. ಎಲ್ಕಾನನು ಯೋವೇ
ಲನ ಮಗ. ಯೋವೇಲನು ಅಜರ್ಯನ ಮಗ.
ಅಜರ್ಯನು ಚೆಫನ್ಯನ ಮಗ. 37ಚೆಫನ್ಯನು ತಹತನ ಮಗ.
ತಹತನು ಅಸೀರನ ಮಗ. ಅಸೀರನು ಎಬ್ಯಾಸಾಫನ ಮಗ.
ಎಬ್ಯಾಸಾಫನು ಕೋರಹನ ಮಗ. 38ಕೋರಹನು ಇಚ್ಹಾ
ರನ ಮಗ, ಇಚ್ಹಾರನು ಕೆಹಾತನ ಮಗ. ಕೆಹಾತನು
ಲೇವಿಯ ಮಗ. ಲೇವಿಯು ಇಸ್ರೇಲನ ಮಗ.

39ಹೇಮಾನನ ಸಂಬಂಧಿಯ ಹೆಸರು ಆಸಾಫ್. ಇವನು
ಹೇಮಾನನ ಬಲಗಡೆಯಲ್ಲಿದ್ದುಕೊಂಡು ಸೇವೆಮಾಡಿ
ದನು. ಆಸಾಫನು ಬೆರೆಕ್ಯನ ಮಗನು. ಬೆರೆಕ್ಯನು ಶಿಮ್ಮನ
ಮಗ. 40ಶಿಮ್ಮನು ಮೀಕಾಯೇಲನ ಮಗ. ಮೀಕಾ
ಯೇಲನು ಬಾಸೇಯನ ಮಗ. ಬಾಸೇಯನು ಮಲ್ಕೀ
ಯನ ಮಗ. 41ಮಲ್ಕೀಯನು ಎತ್ನಿಯ ಮಗ. ಎತ್ನಿಯು
ಜೆರಹನ ಮಗ. ಜೆರಹನು ಆದಾಯನ ಮಗ.
42ಆದಾಯನು ಏತಾನನ ಮಗ. ಏತಾನನು ಜಿಮ್ಮನ ಮಗ.
ಜಿಮ್ಮನು ಶಿಮ್ಮಿಯ ಮಗ. 43ಶಿಮ್ಮಿಯು ಯಹತನ ಮಗ.
ಯಹತನು ಗೇರ್ಷೋಮನ ಮಗ. ಗೇರ್ಷೋಮನು
ಲೇವಿಯ ಮಗ.

44ಮೆರಾರೀಯ ಸಂತತಿಯವರು ಹೇಮಾನ ಮತ್ತು
ಆಸಾಫನ ಸಂಬಂಧಿಕರು. ಇವರು ಹೇಮಾನನ ಎಡ
ಗಡೆಯಲ್ಲಿ ನಿಂತು ಹಾಡುವ ಗಾಯಕರು. ಏತಾನನು
ಕೀಷೀಯ ಮಗ. ಕೀಷೀಯು ಅಬ್ದೀಯ ಮಗ.
ಅಬ್ದೀಯು ಮಲ್ಲೂಕನ ಮಗ. 45ಮಲ್ಲೂಕನು ಹಷಬ್ಯನ
ಮಗ. ಹಷಬ್ಯನು ಅಮಚ್ಯನ ಮಗ. ಅಮಚ್ಯನು ಹಿಲ್ಕೀ
ಯನ ಮಗ. 46ಹಿಲ್ಕೀಯನು ಅಮ್ಚೀಯನ ಮಗ. ಅಮ್ಚೀ
ಯನು ಬಾನೀಯನ ಮಗ. ಬಾನೀಯನು ಶೆಮೆರನ
ಮಗ. 47ಶೆಮೆರನು ಮಹ್ಲೀಯನ ಮಗ. ಮಹ್ಲೀಯನು
ಮೂಷೀಯ ಮಗ. ಮೂಷೀಯು ಮೆರಾರಿಯ ಮಗ.
ಮೆರಾರಿಯು ಲೇವಿಯ ಮಗ.

48ಹೇಮಾನ್ ಮತ್ತು ಆಸಾಫನ ಸಹೋದರರು
ಲೇವಿಕುಲದವರು. ಲೇವಿಕುಲದವರನ್ನು ಲೇವಿಯ
ರೆಂದು ಕರೆಯುತ್ತಾರೆ. ಲೇವಿಯರು ಪವಿತ್ರ ಗುಡಾರದ
ಸೇವೆಯನ್ನು ಮಾಡಲು ಆರಿಸಲ್ಪಟ್ಟವರು. ಪವಿತ್ರ
ಗುಡಾರವು ದೇವರ ನಿವಾಸವಾಗಿತ್ತು. 49ಆದರೆ ಸರ್ವಾಂಗ
ಹೋಮ ಅರ್ಪಿಸುವ ಯಜ್ಞವೇದಿಕೆಯ ಮೇಲೆ ಮತ್ತು
ಧೂಪಾರ್ಪಣೆಯ ಯಜ್ಞವೇದಿಕೆಯ ಮೇಲೆ ಧೂಪ
ವರ್ಪಿಸಲು ಆರೋನನ ಸಂತತಿಯವರನ್ನು ಮಾತ್ರ
ಆರಿಸಿಕೊಳ್ಳಲಾಗಿತ್ತು. ದೇವರ ನಿವಾಸದ ಮಹಾಪವಿತ್ರ
ಸ್ಥಳದಲ್ಲಿ ಆರೋನನ ಸಂತತಿಯವರೇ ಎಲ್ಲಾ ಕೆಲಸ
ಕಾರ್ಯಗಳನ್ನು ಮಾಡುತ್ತಿದ್ದರು. ಅಲ್ಲದೆ ಇಸ್ರೇಲ್

ಜನರನ್ನು ಶುದ್ಧೀಕರಿಸಲು ಶುದ್ಧೀಕರಣ ಆಚಾರವನ್ನು
ಅವರೇ ಮಾಡುತ್ತಿದ್ದರು.

ದೇವರ ಸೇವಕನಾದ ಮೋಶೆಯು ಆಜ್ಞಾಪಿಸಿದ ಎಲ್ಲಾ
ಕಟ್ಟಳೆಗಳನ್ನು ಮತ್ತು ನಿಯಮಗಳನ್ನು ಅವರು
ಅನುಸರಿಸುತ್ತಿದ್ದರು.

## ಆರೋನನ ಸಂತತಿಯವರು

50 ಇವರು ಆರೋನನ ಗಂಡುಮಕ್ಕಳು: ಎಲ್ಲಾಜಾರನು
ಆರೋನನ ಮಗ. ಫೀನೆಹಾಸನು ಎಲ್ಲಾಜಾರನ ಮಗ.
ಅಬೀಷೂವನು ಫೀನೆಹಾಸನ ಮಗ. 51 ಬುಕ್ಕೀಯು ಅಬೀ
ಷೂವನ ಮಗ. ಉಜ್ಜೀಯು ಬುಕ್ಕೀಯ ಮಗ. ಉಜ್ಜೀಯ
ಮಗನು ಜೆರಹ್ಯಾಹ. 52 ಮೆರಾಯೋತನು ಜೆರಹ್ಯಾಹನ
ಮಗ. ಅಮರ್ಯನು ಮೆರಾಯೋತನ ಮಗ.
ಅಹೀಟೂಬನು ಅಮರ್ಯನ ಮಗ. 53 ಚಾದೋಕ್
ಅಹೀಟೂಬನ ಮಗ, ಅಹಿಮಾಚನು ಚಾದೋಕನ ಮಗ.

## ಲೇವಿಯ ಕುಟುಂಬದವರಿಗೆ ಮನೆಗಳು

54 ಈ ಸ್ಥಳಗಳಲ್ಲಿ ಆರೋನನ ಸಂತತಿಯವರು ವಾಸಿಸಿ
ದರು. ಅವರು ತಮಗೆ ಕೊಟ್ಟಿದ್ದ ಪ್ರದೇಶದಲ್ಲಿ ಪಾಳೆ
ಯಗಳಲ್ಲಿ ವಾಸಮಾಡಿದರು. ಲೇವಿಯರಿಗೆ ಕೊಟ್ಟಿರುವ
ಪ್ರಾಂತ್ಯದ ಮೊದಲನೆಯ ಪಾಲು ಕೆಹಾತ್ಯರಿಗೆ
ಕೊಡಲ್ಪಟ್ಟಿತು.

55 ಅವರಿಗೆ ಹೆಬ್ರೋನ್ ಪಟ್ಟಣವೂ ಅದರ ಸುತ್ತ
ಮುತ್ತಲೂ ಇದ್ದ ಹುಲ್ಲುಗಾವಲುಗಳು ಕೊಡಲ್ಪಟ್ಟವು.
ಇದು ಯೆಹೂದ ಪ್ರಾಂತ್ಯದ ಸ್ಥಳವಾಗಿದೆ. 56 ಹೆಬ್ರೋನ್
ಪಟ್ಟಣದ ಸುತ್ತಮುತ್ತಲಿದ್ದ ಊರುಗಳನ್ನು ಮತ್ತು
ಹೊಲಗಳನ್ನು ಯೆಫುನ್ನೆಯ ಮಗನಾದ ಕಾಲೇಬನಿಗೆ
ಕೊಡಲಾಯಿತು. 57 ಆರೋನನ ಸಂತತಿಯವರಿಗೆ
ಹೆಬ್ರೋನ್ ಪಟ್ಟಣವನ್ನೇ ಕೊಟ್ಟರು. ಹೆಬ್ರೋನು
ಆಶ್ರಯಪಟ್ಟಣಗಳಲ್ಲಿ* ಒಂದಾಗಿತ್ತು. ಅವರಿಗೆ ಬೇರೆ
ನಗರಗಳೂ ಕೊಡಲ್ಪಟ್ಟವು: ಲಿಬ್ನ, ಯತ್ತೀರ್,
ಎಷ್ಟೆಮೋವ, ಹೀಲ್ಲೇನ್, ದೆಬೀರ್, 58-59 ಆಷಾನ್,
ಜುತ್ತ ಮತ್ತು ಬೇತ್ಷೆಮೆಷ್. ಅವರಿಗೆ ಈ ಎಲ್ಲಾ
ಪಟ್ಟಣಗಳೂ ಅವುಗಳ ಸುತ್ತಮುತ್ತಲಿದ್ದ ಹೊಲಗಳೂ
ಕೊಡಲ್ಪಟ್ಟವು. 60 ಬೆನ್ಯಾಮೀನ್ ಕುಲದ ಪ್ರಾಂತ್ಯದಿಂದ
ಗಿಬೆಯೋನ್, ಗೆಬಾ, ಅಲೆಮೆತ್ ಮತ್ತು ಅನಾತೋತ್
ಪಟ್ಟಣಗಳೂ ಅದರ ಸುತ್ತಮುತ್ತಲಿದ್ದ ಹೊಲಗಳೂ
ಅವರಿಗೆ ದೊರೆತವು.

ಒಟ್ಟು ಹದಿಮೂರು ಪಟ್ಟಣಗಳನ್ನು ಕೆಹಾತ್ಯನ ಕುಲದ
ವರಿಗೆ ಕೊಡಲ್ಪಟ್ಟಿತು.

61 ಉಳಿದ ಕೆಹಾತ್ಯನ ಸಂತತಿಯವರಿಗೆ ಮನಸ್ಸೆಯ
ಅರ್ಧಕುಲದಿಂದ ಹತ್ತು ಪಟ್ಟಣಗಳು ದೊರಕಿದವು.

62 ಗೇರ್ಷೋಮ್ಯನ ಸಂತತಿಯವರಿಗೆ ಹದಿಮೂರು
ಪಟ್ಟಣಗಳು ದೊರಕಿದವು. ಇವು ಇಸ್ಸಾಕಾರ್, ಆಶೇರ್,
ನಫ್ತಾಲಿ ಮತ್ತು ಬಾಷಾನ್ ಪ್ರದೇಶದಲ್ಲಿ ವಾಸವಾಗಿದ್ದ
ಅರ್ಧಮನಸ್ಸೆ ಕುಲದವರಿಂದ ಆ ಪಟ್ಟಣಗಳು ದೊರೆತವು.

63 ಮೆರಾರೀ ಸಂತತಿಯವರಿಗೆ ಹನ್ನೆರಡು ಪಟ್ಟಣಗಳು
ದೊರೆತವು. ಇವು ರೂಬೇನ್, ಗಾದ್, ಜೆಬುಲೂನ್
ಕುಲದವರ ಸ್ವಾಸ್ತ್ಯದಿಂದ ದೊರೆತವು. ಅವರು ಇದಕ್ಕಾಗಿ
ಚೀಟುಹಾಕಿದರು.

64 ಹೀಗೆ ಇಸ್ರೇಲರು ತಮಗೆ ದೊರಕಿದ ಪ್ರದೇಶದಲ್ಲಿ
ಲೇವಿಯರಿಗೆ ಪಟ್ಟಣಗಳನ್ನೂ ಹೊಲಗಳನ್ನೂ ಕೊಟ್ಟರು.
65 ಅವೆಲ್ಲಾ ಯೆಹೂದ, ಸಿಮೆಯೋನ್ ಮತ್ತು ಬೆನ್ಯಾ
ಮೀನ್ ಕುಲದವರಿಂದ ದೊರಕಿತು. ಯೆಹೂದ ಪಟ್ಟಣ
ಗಳು ಲೇವಿ ಕುಲದ ಯಾವ ಕುಟುಂಬಗಳಿಗೆ ಸಿಗಬೇಕು
ಎಂಬುದನ್ನು ಚೀಟುಹಾಕುವುದರ ಮೂಲಕ ಗೊತ್ತು
ಪಡಿಸಿಕೊಂಡರು.

66 ಎಫ್ರಾಯೀಮ್ ಕುಲದವರು ಕೆಹಾತ್ಯನ ಕುಲ
ದವರಿಗೆ ತಮ್ಮ ಪಾಲಿಗೆ ಬಂದಿದ್ದ ಕೆಲವು ಪಟ್ಟಣಗಳನ್ನು
ಬಿಟ್ಟುಕೊಟ್ಟರು. ಈ ಪಟ್ಟಣಗಳನ್ನು ಚೀಟುಹಾಕುವುದರ
ಮೂಲಕ ನಿರ್ಧರಿಸಲಾಯಿತು. 67 ಅವರಿಗೆ ಶೆಕೆಮನ್ನು
ಕೊಡಲಾಯಿತು. ಶೆಕೆಮ್ ಆಶ್ರಯನಗರವಾಗಿತ್ತು.
ಇದಲ್ಲದೆ ಗೆಜೆರ್, 68 ಯೊಕ್ಮೆಯಾಮ್, ಬೇತ್
ಹೋರೋನ್, 69 ಅಯ್ಯಾಲೋನ್ ಮತ್ತು ಗತ್ರಿ
ಮ್ಮೋನ್ ಪಟ್ಟಣಗಳೂ ಅವುಗಳ ಸುತ್ತಮುತ್ತಲಿದ್ದ
ಹೊಲಗಳೂ ಅವರಿಗೆ ದೊರಕಿದವು. ಇವು ಎಫ್ರಾ
ಯೀಮ್ಯರ ಬೆಟ್ಟಪ್ರದೇಶದಲ್ಲಿ ಇವೆ. 70 ಮನಸ್ಸೆಯ
ಅರ್ಧಕುಲದವರು ಆನೇರ್ ಮತ್ತು ಬಿಳ್ಳಾಮ್ ಎಂಬ
ನಗರಗಳನ್ನು ಕೆಹಾತ್ ಸಂತಾನದ ಉಳಿದವರಿಗೂ
ಕೊಟ್ಟರು. ಅವುಗಳೊಡನೆ ಹೊಲಗಳೂ ಅವರಿಗೆ
ದೊರಕಿದವು.

## ಇನ್ನಿತರ ಲೇವಿಯರಿಗೆ ಮನೆಗಳು ದೊರಕಿದ್ದು

71 ಗೇರ್ಷೋಮ್ ಕುಟುಂಬದವರಿಗೆ ಮನಸ್ಸೆಯ
ಅರ್ಧಕುಲದವರಿಂದ ಬಾಷಾನಿನಲ್ಲಿರುವ ಗೋಲಾನ್
ಮತ್ತು ಅಷ್ಟೋರೋಟ್ ಎಂಬ ಪಟ್ಟಣಗಳೂ ಅದಕ್ಕೆ
ಸೇರಿದ ಹೊಲಗಳೂ ದೊರೆತವು.

72-73 ಗೇರ್ಷೋಮ್ ಕುಟುಂಬದವರಿಗೆ ಇಸ್ಸಾಕಾರ್
ಕುಲದವರಿಂದ ಕೆದೆಷ್, ದಾಬೆರತ್, ರಾಮೋತ್ ಮತ್ತು
ಆನೇಮ್ ಪಟ್ಟಣಗಳೂ ಅವುಗಳ ಸಮೀಪದಲ್ಲಿದ್ದ ಹೊಲ
ಗಳೂ ದೊರಕಿದವು. 74-75 ಇದಲ್ಲದೆ ಗೇರ್ಷೋಮ್

---

**ಆಶ್ರಯಪಟ್ಟಣ** ಆಕಸ್ಮಿಕವಾಗಿ ಒಬ್ಬ ಇಸ್ರೇಲಿಯು ಬೇರೊಬ್ಬನನ್ನು ಕೊಂದರೆ, ಸತ್ತವನ ಸಂಬಂಧಿಕರ ಕೋಪದಿಂದ ತಪ್ಪಿಸಿಕೊಂಡು ಸುರಕ್ಷಿತವಾಗಿರಲು ಓಡಿಹೋಗಬಹುದಾಗಿದ್ದ ಪಟ್ಟಣ. ನೋಡಿ ಯೆಹೋಶುವ 20:1-9.

ಕುಟುಂಬದವರಿಗೆ ಆಶೇರ್‌ಕುಲದವರಿಂದ ಮಾಷಾಲ್, ಅಬ್ದೋನ್, ಹೂಕೋಕ್ ಮತ್ತು ರೆಹೋಬ್ ಪಟ್ಟಣಗಳೂ ಅವುಗಳ ಸಮೀಪದಲ್ಲಿದ್ದ ಹೊಲಗಳೂ ದೊರಕಿದವು.

76ಗೇರ್ಷೋಮ್ ಕುಟುಂಬದವರಿಗೆ ಗಲಿಲಾಯ ಪ್ರಾಂತ್ಯದ ಕಾದೇಶಿನಲ್ಲಿದ್ದ ಪಟ್ಟಣಗಳೂ ಹಮ್ಮೋನ್ ಮತ್ತು ಕಿರ್ಯಾತಯಿಮ್ ಎಂಬ ಪಟ್ಟಣಗಳೂ ಮತ್ತು ಅವುಗಳ ಸಮೀಪದಲ್ಲಿದ್ದ ಹೊಲಗಳೂ ನಫ್ತಾಲಿ ಕುಲದವರಿಂದ ದೊರಕಿದವು.

77ಉಳಿದ ಲೇವಿಯರೆಂದರೆ, ಮೆರಾರೀಕುಲಕ್ಕೆ ಸೇರಿದವರು. ಅವರಿಗೆ ಜೆಬುಲೂನ್ ಕುಲದವರಿಂದ ರಿಮ್ಮೋನೋ ಮತ್ತು ತಾಬೋರ್ ಪಟ್ಟಣಗಳೂ ಅವುಗಳ ಸಮೀಪದಲ್ಲಿದ್ದ ಹೊಲಗಳೂ ದೊರೆತವು.

78-79ಮೆರಾರೀ ಸಂತತಿಯವರು ಮರುಭೂಮಿಯಲ್ಲಿದ್ದ ಬೆಚೆರ್, ಯಹಚ, ಕೆದೇಮೋತ್ ಮತ್ತು ಮೇಫಾತ್ ಎಂಬ ಊರುಗಳನ್ನೂ ಅವುಗಳ ಸಮೀಪದಲ್ಲಿದ್ದ ಹೊಲಗಳನ್ನೂ ರೂಬೇನ್ ಕುಲದವರಿಂದ ಪಡೆದುಕೊಂಡರು. ರೂಬೇನ್ ಕುಲದವರು ಜೆರಿಕೋ ಪಟ್ಟಣಕ್ಕೆ ಎದುರಾಗಿದ್ದ ಜೋರ್ಡನ್ ನದಿಯ ಪೂರ್ವ ಪ್ರಾಂತ್ಯದಲ್ಲಿ ವಾಸಿಸುತ್ತಿದ್ದರು.

80-81ಮೆರಾರೀ ಸಂತಾನದವರಿಗೆ ಗಾದ್ ಸಂತತಿಯವರ ಪ್ರದೇಶದಿಂದ ಗಿಲ್ಯಾದಿನ ರಾಮೋತ್, ಮಹನಯಿಮ್, ಹೆಷ್ಬೋನ್ ಮತ್ತು ಯಗ್ಜೇರ್ ಪಟ್ಟಣಗಳೂ ಅದರ ಸಮೀಪದಲ್ಲಿದ್ದ ಹೊಲಗಳೂ ದೊರಕಿದವು.

## ಇಸ್ಸಾಕಾರನ ಸಂತತಿಯವರು

7 ಇಸ್ಸಾಕಾರನಿಗೆ ನಾಲ್ಕು ಮಂದಿ ಗಂಡುಮಕ್ಕಳು: ತೋಲ, ಪೂವ, ಯಾಶೂಬ್ ಮತ್ತು ಶಿಮ್ರೋನ್. 2ತೋಲನ ಗಂಡುಮಕ್ಕಳು: ಉಜ್ಜೀ, ರೆಫಾಯ, ಯೆರೀಯೇಲ್, ಯಹ್ಮೈ, ಇಬ್ಸಾಮ್ ಮತ್ತು ಸಮುವೇಲ್. ಇವರೆಲ್ಲಾ ಕುಲಪ್ರಧಾನರಾಗಿದ್ದರು. ಇವರೂ ಇವರ ಸಂತತಿಯವರೂ ರಣವೀರರಾಗಿದ್ದರು. ಅವರ ಸಂತತಿಯು ವೃದ್ಧಿಯಾದ ಕಾರಣ ಅರಸನಾದ ದಾವೀದನ ಸಮಯದಲ್ಲಿ ಅವರಲ್ಲಿ ಇಪ್ಪತ್ತೆರಡು ಸಾವಿರದ ಆರುನೂರು ಮಂದಿ ಕಾಲಾಳುಗಳು ಯುದ್ಧಕ್ಕೆ ತಯಾರಾಗಿದ್ದರು.

3ಉಜ್ಜೀಯ ಮಗನು ಇಜ್ರಹ್ಯಾಹ. ಇಜ್ರಹ್ಯಾಹನ ಮಕ್ಕಳು: ಮೀಕಾಯೇಲ್, ಓಬದ್ಯ, ಯೋವೇಲ್ ಮತ್ತು ಇಷ್ಷೀಯ. ಈ ಐದು ಮಂದಿಯೂ ತಮ್ಮ ಗೋತ್ರಗಳ ನಾಯಕರುಗಳಾಗಿದ್ದರು. 4ಇವರ ಚರಿತ್ರೆಯ ಪ್ರಕಾರ ಇವರಲ್ಲಿ ಮೂವತ್ತಾರು ಸಾವಿರ ಮಂದಿ ಯುದ್ಧಕ್ಕೆ ಹೋಗಲು ಸಮರ್ಥರಾಗಿದ್ದರು. ಇವರಿಗೆಲ್ಲಾ ಅನೇಕ ಹೆಂಡತಿಯರು ಮತ್ತು ಮಕ್ಕಳು ಇದ್ದದ್ದರಿಂದ ಇವರ ಕುಲವು ದೊಡ್ಡದಾಗಿತ್ತು.

5ಸಂತಾನದ ಚರಿತ್ರೆಯ ಪ್ರಕಾರ ಇಸ್ಸಾಕಾರ್ ಕುಲದವರಲ್ಲಿದ್ದ ಯುದ್ಧ ವೀರರು ಎಂಭತ್ತೇಳು ಸಾವಿರ ಮಂದಿ.

## ಬೆನ್ಯಾಮೀನನ ಸಂತತಿಯವರು

6ಬೆನ್ಯಾಮೀನನಿಗೆ ಮೂರು ಮಂದಿ ಗಂಡುಮಕ್ಕಳು: ಬೆಳ, ಬೆಕೆರ್ ಮತ್ತು ಯೆದೀಯಯೇಲ್.

7ಬೆಳನಿಗೆ ಐದು ಮಂದಿ ಗಂಡುಮಕ್ಕಳು. ಅವರು ಯಾರೆಂದರೆ: ಎಚ್ಬೋನ್, ಉಜ್ಜೀ, ಉಜ್ಜೀಯೇಲ್, ಯೆರೀಮೋತ್ ಮತ್ತು ಈರೀ. ಇವರೆಲ್ಲಾ ತಮ್ಮ ಗೋತ್ರಗಳಿಗೆ ನಾಯಕರಾಗಿದ್ದರು. ಇವರಲ್ಲಿದ್ದ ಯುದ್ಧವೀರರು ಸಿದ್ಧರಾಗಿದ್ದ ಇಪ್ಪತ್ತೆರಡು ಸಾವಿರದ ಮೂವತ್ನಾಲ್ಕು ಮಂದಿ.

8ಬೆಕೆರನ ಮಕ್ಕಳು ಯಾರೆಂದರೆ: ಜೆಮೀರ, ಯೋವಾಷ್, ಎಲೀಯೆಜೆರ್, ಎಲ್ಯೋವೇನೈ, ಒಮ್ರಿ, ಯೆರೀಮೋತ್, ಅಬೀಯ, ಅನಾತೋತ್ ಮತ್ತು ಆಲೆಮೆತ್. ಇವರೆಲ್ಲಾ ಬೆಕೆರನ ಮಕ್ಕಳು. 9ಅವರ ಕುಲಚರಿತ್ರೆಯಲ್ಲಿ ಅವರ ನಾಯಕರುಗಳು ಯಾರೆಂಬುದನ್ನು ಬರೆಯಲಾಗಿದೆ. ಅವರಲ್ಲಿ ಯುದ್ಧಕ್ಕೆ ಸಿದ್ಧರಾಗಿದ್ದ ಇಪ್ಪತ್ತು ಸಾವಿರದ ಇನ್ನೂರು ಮಂದಿ ಸೈನಿಕರಿದ್ದರು.
10ಯೆದೀಯಯೇಲನ ಮಗನು ಬಿಲ್ಹಾನ್. ಇವನ ಮಕ್ಕಳು ಯಾರೆಂದರೆ: ಯೆಯೂಷ್, ಬೆನ್ಯಾಮೀನ್, ಏಹೂದ್, ಕೆನಾನ್, ಜೇತಾನ್, ತಾರ್ಷೀಷ್ ಮತ್ತು ಅಹೀಷೆಹರ್. 11ಯೆದೀಯಯೇಲನ ಎಲ್ಲಾ ಗಂಡುಮಕ್ಕಳು ತಮ್ಮ ಗೋತ್ರಗಳಿಗೆ ಪ್ರಧಾನರಾಗಿದ್ದರು. ಅವರಲ್ಲಿ ಯುದ್ಧಕ್ಕೆ ಸಿದ್ಧರಾಗಿದ್ದ ಹದಿನೇಳು ಸಾವಿರದ ಇನ್ನೂರು ಮಂದಿ ಸೈನಿಕರಿದ್ದರು.

## ದಾನನ ಸಂತತಿಯವರು

12ಶುಪ್ಪೀಮರು ಮತ್ತು ಹುಪ್ಪೀಮರು ಈರನ ಸಂತತಿಯವರಾಗಿದ್ದರು. ಹುಶೀಮನು ಅಹೇರನ ಮಗ.

## ನಫ್ತಾಲಿಯ ಸಂತತಿಯವರು

13ನಫ್ತಾಲಿಯ ಗಂಡುಮಕ್ಕಳು; ಯಹಚಿಯೇಲ್, ಗೂನೀ, ಯೇಚೆರ್ ಮತ್ತು ಶಲ್ಲೂಮ್.

ಇವರೆಲ್ಲಾ ಬಿಲ್ಹಳ ಸಂತತಿಯವರು.

## ಮನಸ್ಸೆ ಸಂತತಿಯವರು

14ಮನಸ್ಸೆಯ ಸಂತತಿಯವರು ಯಾರೆಂದರೆ: ಮನಸ್ಸೆ ಮತ್ತು ಅವನ ಅರಾಮ್ಯದ ದಾಸಿಯಲ್ಲಿ ಹುಟ್ಟಿದ ಮಗ ಅಶ್ರೀಯೇಲ್; ಅವರಿಗೆ ಮಾಕೀರ್ ಎಂಬ ಇನ್ನೊಬ್ಬ

ಮಗನಿದ್ದನು. ಇವನು ಗಿಲ್ಯಾದನ ತಂದೆ. 15ಮಾಕೀರನು
ಹುಪ್ಪೀಮನ ಮತ್ತು ಶುಪ್ಪೀಮನ ಸಹೋದರಿಯನ್ನು
ಮದುವೆಯಾದನು. ಆಕೆಯ ಹೆಸರು ಮಾಕ. ಗಿಲ್ಯಾದನ
ಮೊಮ್ಮಗನ ಹೆಸರು ಚೆಲೋಫಾದ್. ಇವನಿಗೆ ಹೆಣ್ಣು
ಮಕ್ಕಳೇ ಹುಟ್ಟಿದವು.

16ಮಾಕೀರನ ಹೆಂಡತಿಯಾದ ಮಾಕಳು ಒಂದು ಗಂಡು
ಮಗುವನ್ನು ಹೆತ್ತು ಅವನಿಗೆ ಪೆರೆಷ್ ಎಂದು ಹೆಸರಿಟ್ಟಳು.
ಇವನ ತಮ್ಮನ ಹೆಸರು ಶೆರೆಷ್. ಇವನ ಗಂಡುಮಕ್ಕಳು
ಯಾರೆಂದರೆ: ಊಲಾಮ್ ಮತ್ತು ರೆಕೆಮ್.

17ಊಲಾಮನ ಮಗನು ಬೆದಾನ್.

ಇವರೆಲ್ಲಾ ಗಿಲ್ಯಾದನ ಸಂತತಿಯವರು; ಗಿಲ್ಯಾದನು
ಮಾಕೀರನ ಮಗ. ಮಾಕೀರನು ಮನಸ್ಸೆಯ ಮಗ.
18ಮಾಕೀರನ ತಂಗಿ ಹಮ್ಮೋಲೆಕೆತಳಿಗೆ ಈಷ್ಹೋದ್,
ಅಬೀಯೆಜೆರ್ ಮತ್ತು ಮಹ್ಲ ಎಂಬ ಗಂಡುಮಕ್ಕಳಿದ್ದರು.
19ಶೆಮೀದನ ಮಕ್ಕಳು ಯಾರೆಂದರೆ: ಅಹ್ಯಾನ್, ಶೆಕೆಮ್,
ಲಿಕ್ಹೀ ಮತ್ತು ಅನೀಯಾಮ್.

### ಎಫ್ರಾಯೀಮನ ಸಂತತಿಯವರು

20ಎಫ್ರಾಯೀಮನ ಸಂತತಿಯವರು: ಎಫ್ರಾಯೀಮನ
ಮಗನು ಶೂತೆಲಹ. ಶೂತೆಲಹನ ಮಗನು ಬೆರೆದ್;
ಬೆರೆದನ ಮಗನು ತಹತ್. ತಹತನ ಮಗನು ಎಲ್ಲಾದ.
ಎಲ್ಲಾದನ ಮಗನು ತಹತ್.

21ತಹತನ ಮಗನು ಜಾಬಾದ್ ಮತ್ತು ಜಾಬಾದನ
ಮಗ ಶೂತೆಲಹ.

ಗತ್ ನಗರದ ಮೂಲನಿವಾಸಿಗಳು ಎಜೆರನನ್ನು ಮತ್ತು
ಎಲ್ಲಾದನನ್ನು ಕೊಂದುಹಾಕಿದರು. ಯಾಕೆಂದರೆ
ಎಜೆರನು ಮತ್ತು ಎಲ್ಲಾದನು ಗತ್ ಊರಿನವರ ದನ
ಕುರಿಗಳನ್ನು ಕದ್ದುಕೊಳ್ಳಲು ಹೋಗಿದ್ದರು. 22ಎಜೆರನು
ಮತ್ತು ಎಲ್ಲಾದನ ತಂದೆ ಎಫ್ರಾಯೀಮನು. ತನ್ನ ಮಕ್ಕಳು
ಸತ್ತದ್ದಕ್ಕಾಗಿ ಬಹಳ ದಿನಗಳ ತನಕ ಅವನು ಗೋಳಾಡಿ
ದನು. ಅವನ ಕುಟುಂಬದವರೆಲ್ಲಾ ಬಂದು ಅವನನ್ನು
ಸಂತೈಸಿದರು.

23ಅನಂತರ ಎಫ್ರಾಯೀಮನ ಹೆಂಡತಿಯು
ಇನ್ನೊಂದು ಗಂಡುಮಗುವನ್ನು ಹೆತ್ತಳು. ತಮ್ಮ ಕುಟುಂಬ
ದಲ್ಲಿ ನಡೆದ ದುರ್ಘಟನೆಯ ನೆನಪಿಗಾಗಿ ಇವನಿಗೆ
'ಬೆರೀಯ' ಎಂದು ಹೆಸರಿಟ್ಟರು. 24ಎಫ್ರಾಯೀಮನ
ಮಗಳ ಹೆಸರು ಶೇರಾ. ಅವಳು ಕೆಳಗಿನ ಬೇತ್
ಹೋರೋನ್ ಮತ್ತು ಮೇಲಿನ ಬೇತ್‌ಹೋರೋನ್
ಮತ್ತು ಕೆಳಗಿನ ಉಜ್ಜೇನ್‌ಶೇರ ಮತ್ತು ಮೇಲಿನ
ಉಜ್ಜೇನ್‌ಶೇರ ಪಟ್ಟಣಗಳನ್ನು ಕಟ್ಟಿಸಿದಳು.

25ರೆಫಹನು ಎಫ್ರಾಯೀಮನ ಮಗನು. ರೆಫಹನ
ಮಗನು ರೆಷೆಫ್. ರೆಷೆಫನ ಮಗನು ತೆಲಹ. ತೆಲಹನ
ಮಗನು ತಹನ್. 26ಲದ್ದಾನನು ತಹನನ ಮಗ.
ಅಮ್ಮೀಹೂದನು ಲದ್ದಾನನ ಮಗ. ಎಲೀಷಾಮನು
ಅಮ್ಮೀಹೂದನ ಮಗ.

27ನೋನನು ಎಲೀಷಾಮನ ಮಗ. ಯೆಹೋಶುವನು
ನೋನನ ಮಗ.

28ಎಫ್ರಾಯೀಮನ ಸಂತತಿಯವರು ವಾಸಿಸಿದ
ಪಟ್ಟಣಗಳು ಯಾವುವೆಂದರೆ: ಬೇತೇಲ್ ಮತ್ತು ಅದರ
ಪಕ್ಕದಲ್ಲಿದ್ದ ಹಳ್ಳಿಗಳು; ಪೂರ್ವದಲ್ಲಿ ನಾರಾನ್; ಪಶ್ಚಿಮ
ದಲ್ಲಿ ಗೆಜೆರ್ ಪಟ್ಟಣ ಮತ್ತು ಅದರ ಪಕ್ಕದಲ್ಲಿದ್ದ
ಹಳ್ಳಿಗಳು; ಶೆಕೆಮ್ ಪಟ್ಟಣ ಮತ್ತು ಅದರ ಸಮೀಪದಲ್ಲಿದ್ದ
ಹಳ್ಳಿಗಳು, ಅಯ್ಯಾ ಪಟ್ಟಣ ಮತ್ತು ಅದರ ಸಮೀಪದಲ್ಲಿದ್ದ
ಹಳ್ಳಿಗಳು; 29ಮನಸ್ಸೆಯ ಗಡಿಗೆ ಸಮೀಪದಲ್ಲಿದ್ದ ಊರು
ಗಳಾದ ಬೇತ್ಷಾನ್, ತಾನಾಕ್, ಮೆಗಿದ್ದೋ, ದೋರ್
ಮತ್ತು ಅದರ ಹತ್ತಿರದಲ್ಲಿದ್ದ ಸಣ್ಣ ಊರುಗಳು.
ಯೋಸೇಫನ ಸಂತತಿಯವರು ಈ ಊರುಗಳಲ್ಲಿ ವಾಸ
ವಾಗಿದ್ದರು. ಯೋಸೇಫನು ಇಸ್ರೇಲನ ಮಗನಾಗಿದ್ದನು.

### ಆಶೇರನ ಸಂತತಿಯವರು

30ಆಶೇರನ ಗಂಡುಮಕ್ಕಳು ಯಾರೆಂದರೆ: ಇಮ್ನ,
ಇಷ್ವ, ಇಷ್ವೀ ಮತ್ತು ಬೆರೀಯ. ಅವರ ತಂಗಿ ಸೆರಹ.

31ಬೆರೀಯನ ಗಂಡುಮಕ್ಕಳು: ಹೆಬೆರ್ ಮತ್ತು
ಮಲ್ಕೀಯೇಲ್. ಮಲ್ಕೀಯೇಲನು ಬಿರ್ಜೈತನ ತಂದೆ.
32ಹೆಬೆರನ ಗಂಡುಮಕ್ಕಳು ಯಾರೆಂದರೆ: ಯಫ್ಲೇಟ್,
ಶೋಮೇರ್, ಹೋತಾಮ್ ಮತ್ತು ಅವರ ತಂಗಿ ಶೂವ.

33ಯಫ್ಲೇಟನ ಗಂಡುಮಕ್ಕಳು ಯಾರೆಂದರೆ:
ಪಾಸಾಕ್, ಬಿಮ್ಹಾಲ್ ಮತ್ತು ಅಶ್ವಾತ್.

34ಶೆಮೇರನ ಗಂಡುಮಕ್ಕಳು ಯಾರೆಂದರೆ: ಅಹೀ,
ರೊಹ್ಗ, ಹುಬ್ಬ ಮತ್ತು ಅರಾಮ್.

35ಶೆಮೇರನ ತಮ್ಮನ ಹೆಸರು ಹೆಲೆಮ್. ಇವನ ಗಂಡು
ಮಕ್ಕಳು ಯಾರೆಂದರೆ: ಚೋಫಹ, ಇಮ್ನ, ಶೇಲೆಷ್
ಮತ್ತು ಆಮಾಲ್.

36ಚೋಫಹನ ಗಂಡುಮಕ್ಕಳು ಯಾರೆಂದರೆ: ಸೂಹ,
ಹರ್ನೆಫೆರ್, ಶೂಗಾಲ್, ಬೇರೀ, ಇಮ್ರ, 37ಬೆಚೆರ್,
ಹೋದ್, ಶಮ್ಮ, ಶಿಲ್ಷ, ಇತ್ರಾನ್ ಮತ್ತು ಬೇರ.

38ಯೆತೆರನ ಗಂಡುಮಕ್ಕಳು ಯಾರೆಂದರೆ: ಯೆಫುನ್ನೆ,
ಪಿಸ್ಪ ಮತ್ತು ಅರಾ.

39ಉಲ್ಲನ ಗಂಡುಮಕ್ಕಳು ಯಾರೆಂದರೆ: ಆರಹ,
ಹನ್ನೀಯೇಲ್ ಮತ್ತು ರಿಚ್ಯ.

40ಇವರೆಲ್ಲರೂ ಆಶೇರ್ಯನ ಸಂತತಿಯವರು. ಇವರೆ
ಲ್ಲರೂ ಕುಲಪ್ರಧಾನರಾಗಿದ್ದರು. ಅವರು ಸೈನಿಕರೂ
ನಾಯಕರುಗಳೂ ಆಗಿದ್ದರು. ಅವರ ಕುಲದ ಇತಿಹಾಸದ
ಪ್ರಕಾರ, ಒಟ್ಟು ಇಪ್ಪತ್ತಾರು ಸಾವಿರ ಮಂದಿ ಯುದ್ಧಕ್ಕೆ
ಸಿದ್ಧರಾಗಿದ್ದ ಸೈನಿಕರಿದ್ದರು.

### ಬೆನ್ಯಾಮೀನನ ಸಂತತಿಯವರು

8 ಬೆನ್ಯಾಮೀನನ ಮೊದಲನೆ ಮಗನು ಬೆಳ. ಎರಡ
ನೆಯ ಮಗನು ಅಷ್ಬೇಲ್. ಮೂರನೆಯ ಮಗನು
ಅಹ್ರಹ; 2ನಾಲ್ಕನೆಯ ಮಗನು ನೋಹ; ಮತ್ತು
ಐದನೆಯ ಮಗನು ರಾಫ.
3ಬೆಳನ ಮಕ್ಕಳು ಯಾರೆಂದರೆ: ಅದ್ದಾರ್, ಗೇರ,
ಅಬೀಹೂದ್, 4-5ಅಬೀಷೂವ, ನಾಮಾನ್, ಅಹೋಹ,
ಗೇರ, ಶೆಫೂಫಾನ್ ಮತ್ತು ಹೂರಾಮ್.
6-7ಇವರು ಏಹೂದನ ಸಂತತಿಯವರು. ಇವರು ಗೆಬ
ಗೋತ್ರಗಳ ನಾಯಕರುಗಳಾಗಿದ್ದರು. ಇವರನ್ನು ಇವರ
ಮನೆಗಳಿಂದ ಬಲವಂತದಿಂದ ಹೊರಡಿಸಿ ಮಾನಹತಿಗೆ
ಕಳುಹಿಸಲಾಯಿತು. ಏಹೂದನ ಸಂತತಿಯವರು ಯಾರೆಂ
ದರೆ: ನಾಮಾನ್, ಅಹೀಯ ಮತ್ತು ಗೇರ. ಗೇರನು
ಉಚ್ಚನ ಮತ್ತು ಅಹೀಹುದನ ತಂದೆ.
8ಶಹರಯಿಮನು ಮೋವಾಬಿನಲ್ಲಿ ತನ್ನ ಹೆಂಡತಿಯ
ರಾದ ಹೂಷೀಮ್ ಮತ್ತು ಬಾರ ಎಂಬವರನ್ನು ತ್ಯಜಿಸಿ
ಬೇರೊಬ್ಬ ಹೆಂಡತಿಯಿಂದ ಇತರ ಮಕ್ಕಳನ್ನು ಪಡೆದನು.
9-10ಶಹರಯಿಮನಿಗೆ ಯೋವಾಬ್, ಚಿಬ್ಯ, ಮೇಷ,
ಮಲ್ಕಾಮ್, ಯೆಯೂಚ್, ಸಾಕ್ಯ ಮತ್ತು ಮಿರ್ಮ ಎಂಬ
ಗಂಡುಮಕ್ಕಳನ್ನು ತನ್ನ ಹೆಂಡತಿಯಾದ ಹೋದೆಷಳಿಂದ
ಪಡೆದುಕೊಂಡನು. ಇವರೆಲ್ಲರೂ ತಮ್ಮ ಕುಲ
ಪ್ರಧಾನರಾಗಿದ್ದರು.
11ಶಹರಯಿಮ್ ಮತ್ತು ಹೂಷೀಮಳಿಗೆ ಅಬೀ
ಟೂಬ್ ಮತ್ತು ಎಲ್ಪಾಲ ಎಂಬ ಇಬ್ಬರು ಮಕ್ಕಳಿದ್ದರು.
12-13ಎಲ್ಪಾಲನ ಮಕ್ಕಳು ಯಾರೆಂದರೆ: ಏಬೆರ್,
ಮಿಷ್ಡಾಮ್, ಶೆಮೆದ್, ಬೆರೀಯ ಮತ್ತು ಶಮ.
ಶೆಮೆದನು ಓನೋ ಮತ್ತು ಲೋದ್ ಎಂಬ ಪಟ್ಟಣ
ಗಳನ್ನೂ ಅವುಗಳ ಸುತ್ತಮುತ್ತಲಿನ ಊರುಗಳನ್ನೂ
ಕಟ್ಟಿಸಿದನು. ಅಯ್ಯಾಲೋನಿನಲ್ಲಿ ವಾಸಿಸುತ್ತಿದ್ದ ಕುಲದ
ವರಿಗೆ ಬೆರೀಯ ಮತ್ತು ಶಮ ಕುಲಪ್ರಧಾನರಾಗಿದ್ದರು.
ಇವರು ಗತ್‌ನಲ್ಲಿ ವಾಸಿಸುತ್ತಿದ್ದ ಜನರನ್ನು ಓಡಿಸಿದರು.
14ಬೆರೀಯನ ಗಂಡುಮಕ್ಕಳು ಯಾರೆಂದರೆ: ಅಹ್ಯೋ,
ಶಾಷಕ್, ಯೆರೇಮೋತ್, ಜೆಬದ್ಯ , 15ಅರಾದ್,
ಎದೆರ್, 16ಮಿಕಾಯೇಲ್, ಇಷ್ಪ ಮತ್ತು ಯೋಹ.
17ಎಲ್ಪಾಲನ ಗಂಡುಮಕ್ಕಳು ಯಾರೆಂದರೆ: ಜೆಬದ್ಯ,
ಮೆಷುಲ್ಲಾಮ್, ಹಿಜ್ಕೀ, ಹೆಬೆರ್, 18ಇಷ್ಮೆರೈ, ಇಜ್ಲೀಯ
ಮತ್ತು ಯೋಬಾಬ್.
19ಶಿಮ್ಮಿಯ ಗಂಡುಮಕ್ಕಳು ಯಾರೆಂದರೆ:
ಯಾಕೀಮ್, ಜಿಕ್ರೀ, ಜಬ್ದೀ. 20ಎಲೀಗೇನೈ, ಚಿಲ್ಲತೈ,
ಎಲೀಯೇಲ್, 21ಅದಾಯ, ಬೆರಾಯ ಮತ್ತು
ಶಿಮ್ರಾತ್.
22ಶಾಷಕನ ಮಕ್ಕಳು ಯಾರೆಂದರೆ: ಇಷ್ಪಾನ್, ಏಬೆರ್,
ಎಲೀಯೇಲ್. 23ಅಬ್ದೋನ್, ಜಿಕ್ರೀ, ಹಾನಾನ್,
24ಹನನ್ಯ, ಏಲಾಮ್, ಅನೆತೋತೀಯ, 25ಇಫ್ದೆಯಾಹ
ಮತ್ತು ಪೆನೂವೇಲ್.
26ಯೆರೋಹಾಮನ ಗಂಡುಮಕ್ಕಳು ಯಾರೆಂದರೆ:
ಶಂಷೆರೈ, ಶೆಹರ್ಯ, ಅತಲ್ಯ, 27ಯಾರೆಷ್ಯ, ಏಲೀಯ
ಮತ್ತು ಜಿಕ್ರೀ.
28ಈ ಜನರೆಲ್ಲರು ತಮ್ಮ ಗೋತ್ರಗಳಿಗೆ ನಾಯಕ
ರಾಗಿದ್ದರು. ಇವರ ಗೋತ್ರ ಚರಿತ್ರೆಯಲ್ಲಿ ಇವರನ್ನು
ನಾಯಕರ ಪಟ್ಟಿಯಲ್ಲಿ ಸೇರಿಸಲಾಗಿದೆ. ಇವರೆಲ್ಲಾ
ಜೆರುಸಲೇಮಿನಲ್ಲಿ ವಾಸವಾಗಿದ್ದರು.
29ಯೆಗೂವೇಲನು ಗಿಬ್ಯೋನನ ತಂದೆ. ಇವನು
ಗಿಬ್ಯೋನಿನಲ್ಲಿ ವಾಸಿಸುತ್ತಿದ್ದನು. ಯೆಗೂವೇಲನ
ಹೆಂಡತಿಯ ಹೆಸರು ಮಾಕ. 30ಯೆಗೂವೇಲನ ಚೊಚ್ಚಲ
ಮಗನು ಅಬ್ದೋನ. ಅವನ ಇತರ ಗಂಡುಮಕ್ಕಳು
ಯಾರೆಂದರೆ, ಚೂರ್, ಕೀಷ್, ಬಾಳ್, ನಾದಾಬ್,
31ಗೇದೋರ್, ಅಹ್ಯೋ, ಜೆಕೆರ್ ಮತ್ತು ಮಿಕ್ಲೋತ್.
32ಮಿಕ್ಲೋತನು ಶಿಮಾಹನ ತಂದೆ. ಇವರೂ ತಮ್ಮ
ಸಂಬಂಧಿಕರೊಂದಿಗೆ ಜೆರುಸಲೇಮಿನಲ್ಲಿ ವಾಸ
ವಾಗಿದ್ದರು.
33ನೇರನು ಕೀಷನ ತಂದೆ. ಕೀಷನು ಸೌಲನ ತಂದೆ.
ಸೌಲನು ಯೋನಾತಾನ್, ಮಲ್ಕೀಷೂವ, ಅಬೀನಾ
ದಾಬ್ ಮತ್ತು ಎಷ್ಬಾಳರ ತಂದೆ. 34ಯೋನಾತಾನನ ಮಗ
ಮೆರೀಬ್ಬಾಳ್. ಮೆರೀಬ್ಬಾಳನು ಮೀಕನ ತಂದೆ.
35ಮೀಕನ ಗಂಡುಮಕ್ಕಳು ಯಾರೆಂದರೆ: ಪೀತೋನ್,
ಮೆಲೆಕ್, ತರೇಯ ಮತ್ತು ಅಹಾಜ್.
36ಅಹಾಜನು ಯೆಹೋವದ್ದಾಹನ ತಂದೆ. ಯೆಹೋ
ವದ್ದಾಹನು ಆಲೆಮೆತನ, ಅಜ್ಮಾವೆತನ ಮತ್ತು ಜಿಮ್ರೀಯ
ತಂದೆ. ಜಿಮ್ರೀಯು ಮೋಚನ ತಂದೆ. 37ಮೋಚನು
ಬಿನ್ನನ ತಂದೆ. ರಾಫನು ಬಿನ್ನನ ಮಗ. ಎಲ್ಲಾಸನು ರಾಫನ
ಮಗ. ಆಚೇಲನು ಎಲ್ಲಾಸನ ಮಗ.
38ಆಚೇಲನಿಗೆ ಆರು ಮಂದಿ ಗಂಡುಮಕ್ಕಳು. ಅವರು
ಯಾರೆಂದರೆ: ಅಜ್ರೀಕಾಮ್, ಬೋಕೆರೂ, ಇಷ್ಮಾ
ಯೇಲ್, ಶೆಯರ್ಯ, ಓಬದ್ಯ ಮತ್ತು ಹಾನಾನ್. ಇವರೆ
ಲ್ಲರೂ ಆಚೇಲನ ಗಂಡುಮಕ್ಕಳು.
39ಆಚೇಲನ ತಮ್ಮ ಏಷೆಕ್. ಏಷೆಕನ ಗಂಡುಮಕ್ಕಳು
ಯಾರೆಂದರೆ: ಊಲಾಮನು ಏಷೆಕನ ಚೊಚ್ಚಲಮಗ;
ಯೆಯೂಷನು ಏಷೆಕನ ಎರಡನೆಯ ಮಗನು; ಮೂರನೆ
ಯವನು ಎಲೀಫೆಲೆಟ್. 40ಊಲಾಮನ ಗಂಡುಮಕ್ಕಳೆ
ಲ್ಲರೂ ರಣವೀರರು; ಬಿಲ್ಲು ಬಾಣಗಳನ್ನು ಉಪಯೋ
ಗಿಸುವುದರಲ್ಲಿ ನಿಪುಣರು. ಅವರಿಗೆ ಅನೇಕ ಗಂಡು
ಮಕ್ಕಳು ಮತ್ತು ಗಂಡುಮೊಮ್ಮಕ್ಕಳಿದ್ದರು. ಅವರಿಗೆ ಒಟ್ಟು
ನೂರೈವತ್ತು ಮಂದಿ ಗಂಡುಮಕ್ಕಳು ಮತ್ತು ಗಂಡು
ಮೊಮ್ಮಕ್ಕಳು ಇದ್ದರು. ಇವರೆಲ್ಲಾ ಬೆನ್ಯಾಮೀನನ
ಸಂತತಿಯವರು.

9 ಇಸ್ರೇಲ್ ಜನರ ಎಲ್ಲಾ ಹೆಸರುಗಳು ಅವರವರ
ವಂಶಾವಳಿ ಪಟ್ಟಿಯಲ್ಲಿ ಬರೆಯಲ್ಪಟ್ಟಿದೆ. ಈ ವಂಶಾ
ವಳಿಗಳು ಇಸ್ರೇಲ್ ರಾಜರ ಇತಿಹಾಸದಲ್ಲಿ
ಸೇರಿಸಲ್ಪಟ್ಟಿದೆ.

### ಜೆರುಸಲೇಮಿನ ಜನರು

ಯೆಹೂದ ಪ್ರಾಂತ್ಯದ ಜನರನ್ನು ಸೆರೆಹಿಡಿದು ಬಾಬಿ
ಲೋನಿಗೆ ಒಯ್ಯಲಾಯಿತು. ಅವರು ದೇವರಿಗೆ ಅವಿಧೇ
ಯರಾದ್ದರಿಂದ ಅವರಿಗೆ ಇಂಥ ಸ್ಥಿತಿ ಬಂದೊದಗಿತು.
2 ಅಲ್ಲಿಂದ ಹಿಂತಿರುಗಿಬಂದು ತಮ್ಮ ಸ್ವನಾಡಿನಲ್ಲಿ
ನೆಲೆಸಿದವರಲ್ಲಿ ಮೊದಲನೆಯವರು ಯಾರೆಂದರೆ: ಕೆಲವು
ಇಸ್ರೇಲರು, ಯಾಜಕರು, ಲೇವಿಯರು ಮತ್ತು ದೇವಾ
ಲಯದ ಸೇವಕರು.

3 ಯೆಹೂದ, ಬೆನ್ಯಾಮೀನ್, ಎಫ್ರಾಯೀಮ್ ಮತ್ತು
ಮನಸ್ಸೆ ಗೋತ್ರದವರಾದ ಇವರು ಜೆರುಸಲೇಮಿನಲ್ಲಿ
ವಾಸವಾಗಿದ್ದರು. ಇವರು ಯಾರೆಂದರೆ: 4 ಊತ್ಯೆ ಅಮ್ಮೀ
ಹೂದನ ಮಗ ಅಮ್ಮೀಹೂದನು ಒಮ್ರಿಯ ಮಗ.
ಒಮ್ರಿಯು ಇಮ್ರಿಯ ಮಗ. ಇಮ್ರಿಯು ಬಾನೀಯ
ಮಗ. ಬಾನೀಯು ಪೆರೆಚನ ಸಂತತಿಯವನು. ಪೆರೆಚನು
ಯೆಹೂದನ ಮಗ.

5 ಜೆರುಸಲೇಮಿನಲ್ಲಿ ವಾಸಿಸಿದ ಶೇಲಾಹದವರು
ಯಾರೆಂದರೆ: ಚೊಚ್ಚಲಮಗನಾದ ಅಸಾಯನು.
ಅಸಾಯನಿಗೂ ಗಂಡುಮಕ್ಕಳಿದ್ದರು.

6 ಜೆರಹಳ ಸಂತತಿಯ ಯೆಯೂವೇಲ್ ಮತ್ತು ಅವನ
ಆರುನೂರ ತೊಂಭತ್ತು ಮಂದಿ ಸಂಬಂಧಿಕರು ಜೆರುಸ
ಲೇಮಿನಲ್ಲಿ ವಾಸಿಸಿದರು.

7 ಜೆರುಸಲೇಮಿನಲ್ಲಿ ವಾಸಿಸಿದ ಬೆನ್ಯಾಮೀನನ ಗೋತ್ರ
ದವರು ಯಾರೆಂದರೆ: ಮೆಷುಲ್ಲಾಮನ ಮಗನಾದ
ಸಲ್ಲೂ. ಮೆಷುಲ್ಲಾಮನು ಹೋದವ್ಯನ ಮಗ.
ಹೋದವ್ಯನು ಹಸ್ಸೆನುವಾಹನ ಮಗ. 8 ಇಬ್ನೆಯಾಹನು
ಯೆರೋಹಾಮನ ಮಗ. ಏಲಾನು ಉಜ್ಜೀಯ ಮಗ.
ಉಜ್ಜೀಯು ಮಿಕ್ರೀಯ ಮಗ ಮತ್ತು ಮೆಷುಲ್ಲಾಮನು
ಶೆಫಟ್ಯನ ಮಗ. ಶೆಫಟ್ಯನು ರೆಯೂವೇಲನ ಮಗ.
ರೆಯೂವೇಲನು ಇಬ್ನಿಯಾಹನ ಮಗ. 9 ಬೆನ್ಯಾಮೀನನ
ಕುಲಚರಿತ್ರೆಯ ಪ್ರಕಾರ ಒಂಭೈನೂರ ಐವತ್ತಾರು ಮಂದಿ
ಜೆರುಸಲೇಮಿನಲ್ಲಿ ವಾಸವಾಗಿದ್ದರು. ಇವರೆಲ್ಲರೂ ತಮ್ಮ
ಕುಟುಂಬಗಳ ನಾಯಕರಾಗಿದ್ದರು.

10 ಜೆರುಸಲೇಮಿನಲ್ಲಿ ವಾಸಿಸಿದ ಯಾಜಕರು ಯಾರೆಂ
ದರೆ: ಯೆದಾಯ, ಯೆಹೋಯಾರೀಬ್, ಯಾಕೀನ್
ಮತ್ತು 11 ಅಜರ್ಯ. ಅಜರ್ಯನು ಹಿಲ್ಕೀಯನ ಮಗ;
ಹಿಲ್ಕೀಯನು ಮೆಷುಲ್ಲಾಮನ ಮಗ; ಮೆಷುಲ್ಲಾಮನು
ಚಾದೋಕನ ಮಗ; ಚಾದೋಕನು ಮೆರಾಯೋತನ
ಮಗ; ಮೆರಾಯೋತನು ಅಹೀಟೂಬನ ಮಗ. ಅಹೀ
ಟೂಬನು ದೇವಾಲಯದ ಒಬ್ಬ ವಿಶೇಷ ಅಧಿಕಾರಿ
ಯಾಗಿದ್ದನು. 12 ಇವರಲ್ಲದೆ, ಯೆರೋಹಾಮನ ಮಗ
ನಾದ ಅದಾಯನು ಸಹ ಇದ್ದನು. ಯೆರೋಹಾಮನು
ಪಷ್ಹೂರನ ಮಗ; ಪಷ್ಹೂರನು ಮಲ್ಕೀಯನ ಮಗ;
ಇವರಲ್ಲದೆ, ಅದೀಯೇಲನ ಮಗನಾದ ಮಾಸೈ ಸಹ
ಇದ್ದನು. ಅದೀಯೇಲನು ಯಹ್ಜೇರನ ಮಗ. ಯಹ್ಜೇ
ರನು ಮೆಷುಲ್ಲಾಮನ ಮಗ. ಮೆಷುಲ್ಲಾಮನು ಮೆಷಿ
ಲ್ಲೇಮೋತನ ಮಗ. ಮೆಷಿಲ್ಲೇಮೋತನು ಇಮ್ಮೇರನ
ಮಗ.

13 ಒಟ್ಟು ಒಂದು ಸಾವಿರದ ಏಳುನೂರ ಅರವತ್ತು
ಮಂದಿ ಯಾಜಕರಿದ್ದರು. ಇವರೆಲ್ಲರೂ ತಮ್ಮ ಕುಟುಂಬ
ಗಳಿಗೆ ಪ್ರಧಾನರಾಗಿದ್ದರು. ದೇವಾಲಯದ ಕೆಲಸ
ಕಾರ್ಯಗಳ ಜವಾಬ್ದಾರಿಕೆಯನ್ನು ಇವರು ಹೊತ್ತು
ಕೊಂಡಿದ್ದರು.

14 ಜೆರುಸಲೇಮಿನಲ್ಲಿ ವಾಸಿಸಿದ ಲೇವಿ ಕುಲದ ಜನರು
ಯಾರೆಂದರೆ: ಹಷ್ಷೂಬನ ಮಗನಾದ ಶೆಮಾಯ. ಹಷ್ಷೂ
ಬನು ಅಜ್ರೀಕಾಮನ ಮಗ. ಅಜ್ರೀಕಾಮನು ಹಷಬ್ಯನ
ಮಗ. ಹಷಬ್ಯನು ಮೆರಾರೀಯ ಸಂತತಿಯವನು.
15 ಜೆರುಸಲೇಮಿನಲ್ಲಿ ವಾಸಿಸಿದ ಇತರರು ಯಾರೆಂದರೆ:
ಬಕ್ಬಕ್ಕರ್, ಹೆರೆಷ್, ಗಾಲಾಲ್ ಮತ್ತು ಮತ್ತನ್ಯ.
ಮತ್ತನ್ಯನು ಮೀಕನ ಮಗ. ಮೀಕನು ಜಿಕ್ರೀಯ ಮಗ.
ಜಿಕ್ರೀಯು ಆಸಾಫನ ಮಗ. 16 ಓಬದ್ಯನು ಶೆಮಾಯನ
ಮಗ. ಶೆಮಾಯನು ಗಾಲಾಲನ ಮಗ. ಗಾಲಾಲನು
ಯೆದೂತೂನನ ಮಗ. ಆಸನ ಮಗನಾದ ಬೆರೆಕ್ಯನು
ಜೆರುಸಲೇಮಿನಲ್ಲಿ ವಾಸಿಸುತ್ತಿದ್ದನು. ಆಸನು ಎಲ್ಕಾನನ
ಮಗ. ಎಲ್ಕಾನನು ನೆಟೋಫ ಜನರ ಸಮೀಪದ
ಗ್ರಾಮದಲ್ಲಿ ವಾಸಿಸುತ್ತಿದ್ದನು.

17 ಜೆರುಸಲೇಮಿನಲ್ಲಿ ವಾಸಿಸುತ್ತಿದ್ದ ದ್ವಾರಪಾಲಕರು
ಯಾರೆಂದರೆ: ಶಲ್ಲೂಮ್, ಅಕ್ಕೂಬ್, ಟಲ್ಮೋನ್,
ಅಹೀಮಾನ್ ಮತ್ತು ಅವರ ಕುಟುಂಬದವರು. ಶಲ್ಲೂ
ಮನು ಅವರ ನಾಯಕನಾಗಿದ್ದನು. 18 ಇವರೆಲ್ಲರೂ
ಪೂರ್ವದಿಕ್ಕಿನಲ್ಲಿರುವ ರಾಜನ ಹೆಬ್ಬಾಗಿಲನ್ನು ಕಾಯುತ್ತಿ
ರುತ್ತಾರೆ. ಇವರೆಲ್ಲಾ ಲೇವಿಕುಲಕ್ಕೆ ಸೇರಿದವರು.
19 ಶಲ್ಲೂಮನು ಕೋರೇಯ ಮಗನು. ಕೋರೇಯ
ಎಬ್ಯಾಸಾಫನ ಮಗನು. ಎಬ್ಯಾಸಾಫನು ಕೋರಹನ
ಮಗನು. ಶಲ್ಲೂಮನೂ ಅವನ ಸಹೋದರರೂ ದ್ವಾರ
ಪಾಲಕರಾಗಿದ್ದರು. ಅವರೆಲ್ಲರೂ ಕೋರಹನ ಸಂತತಿ
ಯವರು. ಪವಿತ್ರಗುಡಾರದ ಬಾಗಿಲುಗಳನ್ನು ಕಾಯುವ
ಜವಾಬ್ದಾರಿಕೆ ಇವರದಾಗಿತ್ತು. ತಮ್ಮ ಪೂರ್ವಿಕರು
ಮಾಡಿದ್ದಂತೆಯೇ ಅವರು ಈ ಕೆಲಸವನ್ನು ಮಾಡಿದರು.
ಯೆಹೋವನ ಪಾಳೆಯದ ಪ್ರವೇಶದ್ವಾರವನ್ನು ಕಾಯು
ವುದು ಅವರ ಪೂರ್ವಿಕರ ಉದ್ಯೋಗವಾಗಿತ್ತು. 20 ಹಿಂದೆ
ಫೀನೆಹಾಸನು ದ್ವಾರಪಾಲಕರ ನಾಯಕನಾಗಿದ್ದನು.

ಫೀನೆಹಾಸನು ಎಲ್ಲಾಜಾರನ ಮಗ. ದೇವರು ಫೀನೆಹಾಸ
ನೊಂದಿಗಿದ್ದನು. 21ಮೆಷಲೆಮ್ಯನ ಮಗನಾದ ಜೆಕ-
ರ್ಯನು ಪವಿತ್ರ ಗುಡಾರದ ಪ್ರವೇಶದ್ವಾರಕ್ಕೆ ಪಾಲಕ
ನಾಗಿದ್ದನು.

22ಒಟ್ಟು ಇನ್ನೂರ ಹನ್ನೆರಡು ಮಂದಿ ಪವಿತ್ರಗುಡಾರದ
ಬಾಗಿಲನ್ನು ಕಾಯುವುದಕ್ಕೆ ಆರಿಸಲ್ಪಟ್ಟಿದ್ದರು. ಅವರ
ಹೆಸರುಗಳು ವಂಶದ ಚರಿತ್ರೆಯಲ್ಲಿ ಬರೆಯಲ್ಪಟ್ಟಿರುತ್ತವೆ.
ದಾವೀದನೂ ದೇವರ ಮನುಷ್ಯನಾದ ಸಮುವೇಲನೂ
ಇವರನ್ನು ಆರಿಸಿಕೊಂಡರು. ಯಾಕೆಂದರೆ ಇವರೆಲ್ಲರೂ
ನಂಬಿಗಸ್ತರಾಗಿದ್ದರು. 23ಅವರೂ ಅವರ ಸಂತತಿ
ಯವರೂ ದೇವದರ್ಶನಗುಡಾರದ ದ್ವಾರಪಾಲಕ
ರಾಗಿದ್ದರು. 24ಅದಕ್ಕೆ ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ
ದಿಕ್ಕುಗಳಲ್ಲಿ ನಾಲ್ಕು ಬಾಗಿಲುಗಳಿದ್ದವು. 25ಗ್ರಾಮಗಳಲ್ಲಿ
ನೆಲೆಸಿದ ದ್ವಾರಪಾಲಕರ ಕುಟುಂಬದವರು ತಮ್ಮ
ಸರದಿಗನುಗುಣವಾಗಿ ಏಳು ದಿವಸದ ಕರ್ತವ್ಯ ಮುಗಿಸಿ
ಹೋಗುತ್ತಿದ್ದರು.

26ಲೇವಿಕುಲದ ನಾಲ್ಕು ಮಂದಿ ಎಲ್ಲಾ ದ್ವಾರ
ಪಾಲಕರಿಗೆ ನಾಯಕರಾಗಿದ್ದರು. ದೇವಾಲಯದ ಕೋಣೆ
ಗಳನ್ನೂ ಅಲ್ಲಿಟ್ಟಿರುವ ಹಣದ ಪೆಟ್ಟಿಗೆಗಳನ್ನೂ ಅವರು
ಕಾಯುತ್ತಿದ್ದರು. 27ಅವರು ರಾತ್ರಿಯಲ್ಲಿ ಕಾವಲು
ಕಾಯುತ್ತಿದ್ದರು ಮತ್ತು ಪ್ರತಿ ಮುಂಜಾನೆ ದೇವಾಲಯದ
ಬಾಗಿಲನ್ನು ತೆರೆಯುತ್ತಿದ್ದರು.

28ಅವರಲ್ಲಿ ಕೆಲವರು ದೇವಾಲಯದ ಪಾತ್ರೆಗಳಿಗೆ
ಮೇಲ್ವಿಚಾರಕರಾಗಿದ್ದು ಅವುಗಳನ್ನು ಒಳಗೆ ತರುವಾ
ಗಲೂ ಹೊರಗೆ ತೆಗೆದುಕೊಂಡು ಹೋಗುವಾಗಲೂ
ಲೆಕ್ಕಮಾಡುತ್ತಿದ್ದರು. 29ಇನ್ನು ಕೆಲವರು ಮರದ ಸಾಮಾ
ನುಗಳಿಗೂ ವಿಶೇಷವಾದ ಪಾತ್ರೆಗಳಿಗೂ ಮೇಲ್ವಿಚಾರಕ
ರಾಗಿದ್ದು ಗೋಧಿಹಿಟ್ಟು, ದ್ರಾಕ್ಷಾರಸ, ಎಣ್ಣೆ, ಧೂಪ
ಮತ್ತು ಪರಿಮಳದ್ರವ್ಯ ಇವುಗಳ ಪಾರುಪತ್ಯಗಾರ
ರಾಗಿದ್ದರು. 30ಯಾಜಕರ ಸಂತಾನದವರಲ್ಲಿ ಕೆಲವರು
ಪರಿಮಳ ದ್ರವ್ಯಗಳಿಂದ ತೈಲಮಾಡುತ್ತಿದ್ದರು.

31ಮತ್ತಿತ್ಯ ಎಂಬ ಲೇವಿಯು ದೇವರಿಗೆ ಸಮರ್ಪಿಸುವ
ರೊಟ್ಟಿಯನ್ನು ತಯಾರು ಮಾಡುತ್ತಿದ್ದನು. ಇವನು
ಶಲ್ಲೂಮನ ಚೊಚ್ಚಲಮಗ. ಶಲ್ಲೂಮನು ಕೋರಹನ
ಕುಲದವನಾಗಿದ್ದನು.

32ಕೋರಹನ ಕುಲದ ಕೆಲವರಿಗೆ, ಪ್ರತಿ ಸಬ್ಬತ್ ದಿವಸ
ದೇವರ ಸನ್ನಿಧಾನದಲ್ಲಿ ಇಡುವ ನೈವೇದ್ಯದ ರೊಟ್ಟಿಯನ್ನು
ತಯಾರಿಸುವ ಕೆಲಸವಿತ್ತು.

33ಗಾಯಕರು ಮತ್ತು ತಮ್ಮ ಕುಟುಂಬಗಳಿಗೆ ನಾಯಕ
ರಾಗಿದ್ದ ಲೇವಿಯರು ದೇವಾಲಯದ ಕೋಣೆಗಳಲ್ಲಿ
ಇರುತ್ತಿದ್ದರು. ಅವರು ಇತರ ಕೆಲಸಗಳನ್ನು ಮಾಡಬೇಕಾ
ಗಿರಲಿಲ್ಲ; ಯಾಕೆಂದರೆ ದೇವಾಲಯದ ಹಗಲಿರುಳಿನ
ಕೆಲಸಕಾರ್ಯಗಳ ಜವಾಬ್ದಾರಿಕೆ ಇವರದಾಗಿತ್ತು.

34ಈ ಲೇವಿಯರೆಲ್ಲಾ ತಮ್ಮತಮ್ಮ ಕುಟುಂಬಗಳಿಗೆ
ಪ್ರಧಾನರಾಗಿದ್ದರು. ಇವರ ಹೆಸರುಗಳು ಅವರ ಕುಟುಂಬ
ಚರಿತ್ರೆಯಲ್ಲಿ ಬರೆಯಲ್ಪಟ್ಟಿರುತ್ತದೆ. ಅವರು ಜೆರುಸಲೇ
ಮಿನಲ್ಲಿ ವಾಸಿಸಿದರು.

### ಅರಸನಾದ ಸೌಲನ ವಂಶಾವಳಿ

35ಯೆಯೂವೇಲನು ಗಿಬ್ಯೋನನ ತಂದೆ. ಯೆಯೂ
ವೇಲನು ಗಿಬ್ಯೋನ್ ಪಟ್ಟಣದಲ್ಲಿ ವಾಸಮಾಡುತ್ತಿದ್ದನು.
ಯೆಯೂವೇಲನ ಹೆಂಡತಿಯ ಹೆಸರು ಮಾಕ.
36ಯೆಯೂವೇಲನ ಚೊಚ್ಚಲಮಗನು ಅಬ್ದೋನ. ಅವನ
ಇತರ ಗಂಡುಮಕ್ಕಳು ಯಾರೆಂದರೆ: 37ಚೂರ್, ಕೀಷ್,
ಬಾಳ್, ನೇರ್, ನಾದಾಬ್, ಗೆದೋರ್, ಅಹ್ಯೊ,
ಜಕರ್ಯ ಮತ್ತು ಮಿಕ್ಲೋತ್. 38ಮಿಕ್ಲೋತನು ಶಿಮಾ
ಮನ ತಂದೆ. ಯೆಯೂವೇಲನ ಕುಟುಂಬದವರೆಲ್ಲಾ
ತಮ್ಮ ಸಂಬಂಧಿಕರೊಂದಿಗೆ ಜೆರುಸಲೇಮಿನಲ್ಲಿ
ವಾಸಿಸುತ್ತಿದ್ದರು.

39ನೇರನು ಕೀಷನ ತಂದೆ. ಕೀಷನು ಸೌಲನ ತಂದೆ.
ಸೌಲನ ಗಂಡುಮಕ್ಕಳು ಯಾರೆಂದರೆ: ಯೋನಾತಾನ್,
ಮಲ್ಕೀಷೂವ, ಅಬೀನಾದಾಬ್ ಮತ್ತು ಎಷ್ಬಾಳ್.

40ಯೋನಾತಾನನ ಮಗನಾದ ಮೆರೀಬ್ಬಾಳನು
ಮೀಕನ ತಂದೆ.

41ಮೀಕನ ಗಂಡುಮಕ್ಕಳು ಯಾರೆಂದರೆ: ಪೀತೋನ್,
ಮೆಲೆಕ್, ತಹ್ರೇಯ ಮತ್ತು ಆಹಾಜ್. 42ಆಹಾಜನು
ಯಗ್ರಾಹನ ತಂದೆ. ಯಗ್ರಾಹನು ಜಾರಹನ ತಂದೆ.
ಜಾರಹನು ಆಲೆಮೆತ್, ಅಜ್ಮಾವೆತ್ ಮತ್ತು ಜಿಮ್ರೀ ಇವರ
ತಂದೆ. ಜಿಮ್ರೀಯು ಮೋಚನ ತಂದೆ. 43ಮೋಚನು
ಬಿನ್ನನ ತಂದೆ. ರೆಫಾಯನು ಬಿನ್ನನ ಮಗ. ಎಲ್ಲಾಸನು
ರೆಫಾಯನ ಮಗ. ಆಚೇಲನು ಎಲ್ಲಾಸನ ಮಗ.

44ಆಚೇಲನಿಗೆ ಆರು ಮಂದಿ ಗಂಡುಮಕ್ಕಳಿದ್ದರು.
ಅವರು ಯಾರೆಂದರೆ: ಅಜ್ರೀಕಾಮ್, ಬೋಕೆರೂ,
ಇಷ್ಮಾಯೇಲ್, ಶೆಯರ್ಯ, ಓಬದ್ಯ ಮತ್ತು ಹಾನಾನ್.

### ಅರಸನಾದ ಸೌಲನ ಮರಣ

10 ಫಿಲಿಷ್ಟಿಯರು ಇಸ್ರೇಲರ ವಿರೋಧವಾಗಿ ಕಾದಾ
ಡಿದರು. ಆದರೆ ಇಸ್ರೇಲರು ಫಿಲಿಷ್ಟಿಯರ ಎದುರಿ
ನಿಂದ ಓಡಿಹೋಗಬೇಕಾಯಿತು. ಇಸ್ರೇಲರಲ್ಲಿ ಬಹಳ
ಮಂದಿ ಗಿಲ್ಬೋವ ಬೆಟ್ಟದ ಮೇಲೆ ಹತರಾದರು.
2ಫಿಲಿಷ್ಟಿಯರು ಸೌಲನನ್ನು ಬೆನ್ನಟ್ಟುತ್ತಾ ಹೋಗಿ ಕೊನೆಗೆ
ಸೌಲನನ್ನೂ ಅವನ ಮಕ್ಕಳಾದ ಯೋನಾತಾನನನ್ನೂ
ಅಬೀನಾದಾಬನನ್ನೂ ಮಲ್ಕೀಷೂವನನ್ನೂ ಕೊಂದರು.
3ಸೌಲನ ಸುತ್ತಲೂ ಯುದ್ಧವು ಬಹು ಘೋರವಾಗಿ
ನಡೆಯಿತು. ಬಿಲ್ಲುಗಾರರು ತಮ್ಮ ಬಿಲುಗಳಿಂದ ಸೌಲನ
ಕಡೆಗೆ ಗುರಿಯಿಟ್ಟು ಹೊಡೆದು ಅವನನ್ನು ಗಾಯ

ಪಡಿಸಿದರು. [4]ಆಗ ಸೌಲನು ತನ್ನ ಆಯುಧ ಹೊರು
ವವನಿಗೆ, ‘‘ನಿನ್ನ ಖಡ್ಗದಿಂದ ನನ್ನನ್ನು ಇರಿದುಕೊಂದು
ಹಾಕು. ಆಗ ಪರದೇಶಿಯರು ಬಂದು ನನ್ನನ್ನು ಗಾಯ
ಪಡಿಸಿ ಹಾಸ್ಯಮಾಡಲು ಸಾಧ್ಯವಾಗುವುದಿಲ್ಲ’’ ಎಂದನು.
ಆದರೆ ಅವನ ಆಯುಧಹೊರುವವನು ಅದಕ್ಕೆ ಒಪ್ಪ
ಲಿಲ್ಲ; ಸೌಲನನ್ನು ಕೊಲ್ಲಲು ಅವನು ಹೆದರಿದನು. ಆಗ
ಸೌಲನು ತನ್ನ ಖಡ್ಗದ ಮೇಲೆ ತಾನೇ ಬಿದ್ದು ಸತ್ತನು.
[5]ಅವನ ಆಯುಧಹೊರುವವನು ಸೌಲನು ಸತ್ತದ್ದನ್ನು
ನೋಡಿ ತಾನೂ ಆತ್ಮಹತ್ಯೆ ಮಾಡಿಕೊಂಡನು.
[6]ಹೀಗೆ ಸೌಲನೂ ಅವನ ಮೂರು ಮಂದಿ ಮಕ್ಕಳೂ
ಒಟ್ಟಿಗೆ ಸತ್ತರು.
[7]ತಗ್ಗಿನಲ್ಲಿ ವಾಸಿಸುತ್ತಿದ್ದ ಇಸ್ರೇಲರು ತಮ್ಮ ಸೈನ್ಯವು
ವೈರಿಗಳಿಂದ ಓಡಿಸಲ್ಪಡುವದನ್ನು ನೋಡಿದರು. ಅರಸ
ನಾದ ಸೌಲನು ಮತ್ತು ಅವನ ಗಂಡುಮಕ್ಕಳು ಸತ್ತು
ಹೋಗಿರುವುದು ಅವರಿಗೆ ತಿಳಿಯಿತು. ಆಗ ಅವರೂ
ತಮ್ಮತಮ್ಮ ಮನೆಗಳನ್ನು ಬಿಟ್ಟು ಓಡಿದರು. ಫಿಲಿಷ್ಟಿಯರು
ಅವರ ಮನೆಗಳಿಗೆ ಬಂದಾಗ ಯಾರೂ ಇಲ್ಲದ್ದನ್ನು
ನೋಡಿ ಅಲ್ಲಿಯೇ ವಾಸಿಸಿದರು.
[8]ಮರುದಿವಸ ಫಿಲಿಷ್ಟಿಯರು ಹೆಣಗಳ ಮೇಲಿರುವ
ಬೆಲೆಬಾಳುವ ವಸ್ತುಗಳನ್ನು ದೋಚಲು ಬಂದರು. ಆಗ
ಅವರಿಗೆ ಗಿಲ್ಬೋವ ಬೆಟ್ಟದ ಮೇಲೆ ಸೌಲ ಮತ್ತು ಅವನ
ಗಂಡುಮಕ್ಕಳ ಶರೀರಗಳು ದೊರಕಿದವು. [9]ಸೌಲನ
ಶರೀರದ ಮೇಲಿದ್ದ ಬೆಲೆಬಾಳುವ ವಸ್ತುಗಳನ್ನು ಅವರು
ದೋಚಿಕೊಂಡರು; ಅವನ ತಲೆಯನ್ನೂ ಆಯುಧ
ಗಳನ್ನೂ ತೆಗೆದುಕೊಂಡು ತಮ್ಮ ಊರಿನಲ್ಲಿದ್ದ ಜನರಿಗೂ
ಅವರ ಸುಳ್ಳುದೇವರುಗಳಿಗೂ ತಿಳಿಸಲು ಸಂದೇಶಕರನ್ನು
ಕಳುಹಿಸಿದರು. [10]ಫಿಲಿಷ್ಟಿಯರು ಸೌಲನ ಆಯುಧ
ಗಳನ್ನು ತಮ್ಮ ದೇವರ ಆಲಯದಲ್ಲಿಟ್ಟರು. ಸೌಲನ
ತಲೆಯನ್ನು ದಾಗೋನನ ದೇವಸ್ಥಾನದಲ್ಲಿ ತೂಗು
ಹಾಕಿದರು.
[11]ಫಿಲಿಷ್ಟಿಯರು ಸೌಲನಿಗೆ ಮಾಡಿದ್ದು ಯಾಬೇಷ್
ಗಿಲ್ಯಾದಿನ ಜನರಿಗೆ ತಿಳಿಯಿತು. [12]ಆಗ ಯಾಬೇಷ್
ಗಿಲ್ಯಾದಿನ ರಣವೀರರು ಹೊರಟು ಸೌಲನ ಮತ್ತು ಅವನ
ಗಂಡುಮಕ್ಕಳ ಶವಗಳನ್ನು ಯಾಬೇಷ್ ಗಿಲ್ಯಾದಿಗೆ
ತಂದರು. ಆ ರಣವೀರರು ಸೌಲನ ಮತ್ತು ಅವನ ಗಂಡು
ಮಕ್ಕಳ ಎಲುಬುಗಳನ್ನು ಯಾಬೇಷಿನಲ್ಲಿದ್ದ ಒಂದು
ದೊಡ್ಡ ಮರದ ಬುಡದಲ್ಲಿ ಹೂಳಿಟ್ಟರು. ಅನಂತರ ಏಳು
ದಿವಸಗಳ ತನಕ ಅವರು ಶೋಕಿಸಿದರು.
[13]ಸೌಲನು ಯೆಹೋವನಿಗೆ ಅವಿಧೇಯನಾಗಿದ್ದರಿಂದ
ಸತ್ತನು. ಅವನು ಯೆಹೋವನ ಮಾತನ್ನು ಕೇಳದೆ
ಹೋದನು. [14]ಅಲ್ಲದೆ ಅವನು ಯೆಹೋವನ ಸಲಹೆ
ಯನ್ನು ಪಡೆದುಕೊಳ್ಳುವ ಬದಲಾಗಿ ಮಾಟಮಂತ್ರ
ಮಾಡುವ ಹೆಂಗಸಿನ ಬಳಿಗೆ ಹೋದನು. ಆದ್ದರಿಂದಲೇ
ಯೆಹೋವನು ರಾಜ್ಯವನ್ನು ಸೌಲನಿಂದ ತೆಗೆದು ಇಷ
ಯನ ಮಗನಾದ ದಾವೀದನಿಗೆ ಕೊಟ್ಟನು.

### ದಾವೀದನು ಇಸ್ರೇಲರ ಅರಸನಾದನು

11 ಎಲ್ಲಾ ಇಸ್ರೇಲರು ಹೆಬ್ರೋನಿನಲ್ಲಿದ್ದ ದಾವೀ
ದನ ಬಳಿಗೆ ಬಂದು, ‘‘ನಾವು ನಿನ್ನ ಸಂತತಿ
ಯವರು [2]ಹಿಂದೆ ನೀನು ನಮ್ಮನ್ನು ಯುದ್ಧದಲ್ಲಿ
ನಡೆಸಿರುವೆ. ಆಗ ಸೌಲನು ಅರಸನಾಗಿದ್ದರೂ ನೀನು
ನಮ್ಮ ಯುದ್ಧದಲ್ಲಿ ನಾಯಕನಾಗಿದ್ದೆ. ಯೆಹೋವನು
ನಿನಗೆ, ‘ದಾವೀದನೇ, ನೀನು ನಿನ್ನ ಜನರಾದ ಇಸ್ರೇಲರ
ಪಾಲಕನಾಗಿರಬೇಕು. ನನ್ನ ಜನರಿಗೆ ನೀನು ನಾಯಕ
ನಾಗಿರಬೇಕು’’’ ಎಂದು ಹೇಳಿದ್ದಾನಲ್ಲವೆ ಅಂದರು.
[3]ಹೆಬ್ರೋನಿಗೆ ಬಂದ ಇಸ್ರೇಲರೆಲ್ಲಾ ಅಲ್ಲಿ ಯೆಹೋ
ವನ ಮುಂದೆ ದಾವೀದನೊಂದಿಗೆ ಒಪ್ಪಂದ ಮಾಡಿ
ಕೊಂಡರು. ಆ ಅಧಿಪತಿಗಳೆಲ್ಲಾ ದಾವೀದನನ್ನು
ಅಭಿಷೇಕಿಸಿ ಅವನನ್ನು ಇಸ್ರೇಲರ ಅರಸನನ್ನಾಗಿ ಮಾಡಿ
ದರು. ಇದು ಯೆಹೋವನ ವಾಗ್ದಾನವಾಗಿತ್ತು. ಪ್ರವಾದಿ
ಯಾದ ಸಮುವೇಲನ ಮೂಲಕ ಯೆಹೋವನು ಈ
ವಾಗ್ದಾನವನ್ನು ಮಾಡಿದ್ದನು.

### ದಾವೀದನು ಜೆರುಸಲೇಮನ್ನು ಆಕ್ರಮಿಸಿಕೊಂಡನು

[4]ದಾವೀದನೂ ಎಲ್ಲಾ ಇಸ್ರೇಲರೂ ಜೆರುಸಲೇಮಿಗೆ
ಹೊರಟರು. ಆ ಕಾಲದಲ್ಲಿ ಜೆರುಸಲೇಮನ್ನು ಯೆಬೂಸ್
ಎಂದು ಕರೆಯುತ್ತಿದ್ದರು. ಯಾಕೆಂದರೆ ಜೆರುಸಲೇಮ್
ಪಟ್ಟಣದಲ್ಲಿ ಯೆಬೂಸಿಯರು ವಾಸಿಸುತ್ತಿದ್ದರು. ಆ
ಪಟ್ಟಣದಲ್ಲಿದ್ದ ಜನರು ದಾವೀದನಿಗೆ, [5]‘‘ನೀನು ನಮ್ಮ
ಪಟ್ಟಣದೊಳಗೆ ಬರಲು ಸಾಧ್ಯವೇ ಇಲ್ಲ’’ ಎಂದು ಹೇಳಿ
ದರು. ಆದರೆ ದಾವೀದನು ಅವರನ್ನು ಸೋಲಿಸಿ
ಚೀಯೋನ್ ಕೋಟೆಯನ್ನು ಗೆದ್ದುಕೊಂಡನು. ಅಂದಿ
ನಿಂದ ಆ ಸ್ಥಳವು ದಾವೀದನ ನಗರವೆಂದು
ಕರೆಯಲ್ಪಟ್ಟಿತು.
[6]‘‘ಯೆಬೂಸಿಯರ ವಿರುದ್ಧವಾಗಿ ದಾಳಿಮಾಡಿ ಅವ
ರನ್ನು ಸೋಲಿಸುವವನೇ ನನ್ನ ಸೇನಾಧಿಪತಿಯಾಗುವನು’’
ಎಂದು ದಾವೀದನು ಹೇಳಿದಾಗ ಚೆರೂಯಳ ಮಗನಾದ
ಯೋವಾಬನು ಯೆಬೂಸಿಯರ ಮೇಲೆ ಯುದ್ಧಮಾಡಿ
ಜಯಗಳಿಸಿದನು ಮತ್ತು ಇಸ್ರೇಲರ ಸೈನ್ಯಕ್ಕೆ ಅಧಿಪತಿ
ಯಾದನು. [7]ದಾವೀದನು ಕೋಟೆಯೊಳಗೆ ತನಗೆ ಮನೆ
ಮಾಡಿಕೊಂಡನು. ಆದುದರಿಂದ ಅದಕ್ಕೆ ದಾವೀದನಗರ
ಎಂಬ ಹೆಸರು ಬಂತು. [8]ಪಟ್ಟಣದ ಸುತ್ತಲೂ ದಾವೀದನು
ಕೋಟೆಯನ್ನು ಕಟ್ಟಿಸಿದನು. ಮಿಲ್ಲೋವಿನಿಂದ
ಪ್ರಾರಂಭಿಸಿ ಕೋಟೆಯವರೆಗೆ ಪಟ್ಟಣವನ್ನು ಕಟ್ಟಿಸಿದನು.
ಯೋವಾಬನು ಪಟ್ಟಣದ ಉಳಿದ ಭಾಗವನ್ನು ಸರಿ
ಪಡಿಸಿದನು. [9]ದಾವೀದನು ದಿನದಿಂದ ದಿನಕ್ಕೆ

ಬಲಶಾಲಿಯಾದನು. ಸರ್ವಶಕ್ತನಾದ ದೇವರು ಅವನೊಂದಿಗಿದ್ದನು.

### ಮೂರು ಮಂದಿ ವೀರರು

[10]ದಾವೀದನ ಸೈನ್ಯದಲ್ಲಿ ಪರಾಕ್ರಮಿಗಳಿದ್ದರು. ಈ ಪರಾಕ್ರಮಿಗಳು ದಾವೀದನ ರಾಜ್ಯದಲ್ಲಿ ದಾವೀದನೊಂದಿಗೆ ಮಹಾಬಲಿಷ್ಠರಾದರು. ಅವರು ಮತ್ತು ಎಲ್ಲಾ ಇಸ್ರೇಲರು ದಾವೀದನಿಗೆ ಬೆಂಬಲ ನೀಡಿ ಅವನನ್ನು ರಾಜನನ್ನಾಗಿ ಮಾಡಿದರು. ಇದು ಯೆಹೋವನ ವಾಗ್ದಾನದ ಪ್ರಕಾರವೇ ನಡೆಯಿತು.
[11]ದಾವೀದನ ಸೈನ್ಯದಲ್ಲಿದ್ದ ಪರಾಕ್ರಮಿಗಳು ಯಾರೆಂದರೆ:

ಹೆಕ್ಮೋನಿಯನಾದ ಯಾಷೊಬ್ಬಾಮನು. ರಥಾಶ್ವಗಳ ಅಧಿಕಾರಿಗಳಿಗೆ ಅಧಿಪತಿಯಾಗಿದ್ದನು; ಒಂದೇ ಸಾರಿ ಮುನ್ನೂರು ಮಂದಿಯನ್ನು ತನ್ನ ಬರ್ಜಿಯಿಂದ ಕೊಂದಿದ್ದನು.
[12]ಎರಡನೆಯವನು, ಅಹೋಹ್ಯನಾದ ದೋದೋವನ ಮಗನಾದ ಎಲ್ಲಾಜಾರ. ಇವನು ಮೂರು ಮಂದಿ ಪರಾಕ್ರಮಶಾಲಿಗಳಲ್ಲಿ ಒಬ್ಬನು.
[13]ಪಸ್ಥಮ್ಮೀಮ್ ಎಂಬ ಸ್ಥಳದಲ್ಲಿ ಇವನು ದಾವೀದನೊಂದಿಗಿದ್ದನು. ಅಲ್ಲಿಗೆ ಫಿಲಿಷ್ಟಿಯರು ಯುದ್ಧಮಾಡಲು ಬಂದಿದ್ದರು. ಆ ಸ್ಥಳದ ಒಂದು ಹೊಲದಲ್ಲಿ ಬಾರ್ಲಿಯ ಬೆಳೆಯು ಬೆಳೆದು ನಿಂತಿತ್ತು. ಫಿಲಿಷ್ಟಿಯರ ಎದುರಿನಿಂದ ಇಸ್ರೇಲರು ಓಡಿ ದರು.

[14]ಆದರೆ ಆ ಮೂರು ಮಂದಿ ಪರಾಕ್ರಮಶಾಲಿಗಳು ಆ ಜವೆಗೋಧಿಯ ಹೊಲದಲ್ಲಿ ನಿಂತು ಕಾದಾಡಿದರು. ಫಿಲಿಷ್ಟಿಯರು ಸೋತುಹೋದರು. ಆ ದಿವಸ ಯೆಹೋವನು ಇಸ್ರೇಲರಿಗೆ ದೊಡ್ಡ ಜಯವನ್ನು ಉಂಟು ಮಾಡಿದನು.
[15]ಒಂದು ಸಲ ದಾವೀದನು ಅದುಲ್ಲಾಮ್ ಗವಿಯೊಳಗಿದ್ದಾಗ, ರೆಫಾಯಿಮ್ ತಗ್ಗಿನಲ್ಲಿ ಫಿಲಿಷ್ಟಿಯರು ಪಾಳೆಯಮಾಡಿದ್ದರು. ಮೂವತ್ತು ಮಂದಿ ಪರಾಕ್ರಮಿಗಳಲ್ಲಿ ಈ ಮೂರು ಮಂದಿ ಗುಹೆಯಲ್ಲಿದ್ದ ದಾವೀದನೊಂದಿಗೆ ಸೇರಿಕೊಳ್ಳಲು ಹೊಟ್ಟೆಯ ಮೇಲೆ ತೆವಳಿಕೊಂಡೇ ಅವನ ಬಳಿಗೆ ಬಂದರು.

[16]ಇನ್ನೊಂದು ಸಮಯದಲ್ಲಿ ದಾವೀದನು ಕೋಟೆಯೊಳಗಿದ್ದನು. ಫಿಲಿಷ್ಟಿಯರ ಸೈನ್ಯ ಬೇತ್ಲೆಹೇಮಿನಲ್ಲಿತ್ತು.
[17]ದಾಹಗೊಂಡಿದ್ದ ದಾವೀದನು ತನ್ನ ಊರಿನ ನೀರು ಕುಡಿಯಲು ಬಯಸಿ, ''ಬೇತ್ಲೆಹೇಮಿನ ನಗರದ್ವಾರದ ಬಳಿಯಲ್ಲಿರುವ ಬಾವಿಯಿಂದ ಯಾರಾದರೂ ನೀರು ತಂದುಕೊಡುವುದಾದರೆ ಎಷ್ಟೋ ಒಳ್ಳೆಯದು'' ಎಂದು ಅವನು ತಿಳಿಸಿದನು.

[18]ಆಗ ಆ ಮೂವರು ಪರಾಕ್ರಮಿಗಳು ಫಿಲಿಷ್ಟಿಯರ ಸೈನ್ಯದೊಂದಿಗೆ ಹೋರಾಡುತ್ತಾ ಬೇತ್ಲೆಹೇಮಿನ ಬಾಗಿಲ ಬಳಿಯಲ್ಲಿದ್ದ ಬಾವಿಯ ನೀರನ್ನು ಸೇದಿ ದಾವೀದನಿಗೆ ತಂದುಕೊಟ್ಟರು. ಆದರೆ ದಾವೀದನು ಆ ನೀರನ್ನು ಕುಡಿಯಲು ನಿರಾಕರಿಸಿದನು. ಆ ನೀರನ್ನು ಯೆಹೋವನಿಗೆ ಸಮರ್ಪಿಸಿ ನೆಲದ ಮೇಲೆ ಹೊಯಿದುಬಿಟ್ಟನು.
[19]''ದೇವರೇ, ನಾನು ಈ ನೀರನ್ನು ಕುಡಿಯಲಾರೆನು. ಯಾಕೆಂದರೆ ನನಗಾಗಿ ತಮ್ಮ ಪ್ರಾಣ ಕೊಡಲು ಹೆದರದೆ ನೀರನ್ನು ತಂದವರ ರಕ್ತವಿದು'' ಎಂದು ದಾವೀದನು ಅರಿಕೆ ಮಾಡಿ ಆ ನೀರನ್ನು ಕುಡಿಯಲು ನಿರಾಕರಿಸಿದನು. ಈ ರೀತಿಯಾಗಿ ಅನೇಕ ಪರಾಕ್ರಮದ ಕಾರ್ಯಗಳನ್ನು ಈ ಮೂರು ಮಂದಿ ವೀರರು ಮಾಡಿದರು.

### ಇತರ ಪರಾಕ್ರಮಶಾಲಿಗಳು

[20]ಯೋವಾಬನ ತಮ್ಮನಾದ ಅಬ್ಷೈಯು ಬೇರೆ ಮೂರು ಮಂದಿ ಪರಾಕ್ರಮಿಗಳ ನಾಯಕನಾಗಿದ್ದನು. ಆ ಮೂವರು ಪರಾಕ್ರಮಿಗಳಷ್ಟೇ ಇವನೂ ಪ್ರಖ್ಯಾತನಾಗಿದ್ದನು. ಅವನು ತನ್ನ ಬರ್ಜಿಯಿಂದ ಮುನ್ನೂರು ಮಂದಿಯೊಂದಿಗೆ ಯುದ್ಧಮಾಡಿ ಅವರನ್ನು ಹತಮಾಡಿದನು.
[21]ಅಬ್ಷೈಯು ಮೂವತ್ತು ಮಂದಿ ರಣವೀರರಿಗಿಂತಲೂ ಎರಡರಷ್ಟು ಪರಾಕ್ರಮಿಯಾಗಿದ್ದನು. ಅವನು ಅವರಿಗೆ ನಾಯಕನಾದನು.

[22]ಬೆನಾಯನು ಯೆಹೋಯಾದನ ಮಗ. ಇವನು ಕಬ್ಜಯೇಲಿನಿಂದ ಬಂದವನು. ಇವನು ತುಂಬಾ ಶಕ್ತಿಶಾಲಿಯಾಗಿದ್ದನು. ಮೋವಾಬ್ಯರಲ್ಲಿ ಹೆಸರುವಾಸಿಯಾದ ಇಬ್ಬರು ಪರಾಕ್ರಮಶಾಲಿಗಳನ್ನು ಇವನು ಕೊಂದನು. ಒಂದು ದಿವಸ ಹಿಮ ಸುರಿಯುತ್ತಿರುವಾಗಲೇ ಗುಂಡಿಯೊಳಗೆ ಬಿದ್ದಿದ್ದ ಸಿಂಹವನ್ನು ಒಬ್ಬನೇ ಕೊಂದು ಹಾಕಿದನು.
[23]ಈಜಿಪ್ಟಿನಲ್ಲಿ ಅತ್ಯಂತ ಎತ್ತರವಾಗಿದ್ದ ಮಹಾಸೈನಿಕನೊಬ್ಬನನ್ನು ಬೆನಾಯನು ಕೊಂದು ಹಾಕಿದನು. ಅವನು ಏಳೂವರೆ ಅಡಿ ಎತ್ತರವಾಗಿದ್ದನು. ಅವನ ಕೈಯಲ್ಲಿದ್ದ ಈಟಿಯು ದೊಡ್ಡ ಕಂಬದಂತೆ ಇತ್ತು. ಬೆನಾಯನ ಕೈಯಲ್ಲಿ ಒಂದು ದೊಣ್ಣೆ ಮಾತ್ರ ಇತ್ತು. ಬೆನಾಯನು ಅವನ ಹತ್ತಿರ ಹೋಗಿ ಅವನ ಕೈಯಲ್ಲಿದ್ದ ಈಟಿಯನ್ನು ಕಿತ್ತುಕೊಂಡು ಅದರಿಂದಲೇ ಅವನನ್ನು ಸಾಯಿಸಿದನು.
[24]ಇಂಥಾ ಅನೇಕ ಪರಾಕ್ರಮದ ಕೃತ್ಯಗಳನ್ನು ಯೆಹೋಯಾದನ ಮಗನಾದ ಬೆನಾಯನು ಮಾಡಿದ್ದನು. ಆ ಮೂರು ಮಂದಿ ವೀರರಂತೆಯೇ ಇವನೂ ಹೆಸರುವಾಸಿಯಾಗಿದ್ದನು.
[25]ಬೆನಾಯನು ಮೂವತ್ತು ಪರಾಕ್ರಮಿಗಳಿಗಿಂತಲೂ ಹೆಚ್ಚು ಹೆಸರುವಾಸಿಯಾಗಿದ್ದನು. ಆದರೆ ಇವನು ಆ ಮೂವರು ಪರಾಕ್ರಮಿಗಳಲ್ಲಿ ಒಬ್ಬನಾಗಿರಲಿಲ್ಲ. ದಾವೀದನು ಇವನನ್ನು ಅಂಗರಕ್ಷಕರಿಗೆ ನಾಯಕನನ್ನಾಗಿ ಮಾಡಿದನು.

### ಮೂವತ್ತು ಮಂದಿ ಯುದ್ಧವೀರರು

[26]ಮೂವತ್ತು ಮಂದಿ ಯುದ್ಧವೀರರು ಯಾರೆಂದರೆ: ಯೋವಾಬನ ತಮ್ಮನಾದ ಅಸಾಹೇಲನು. ಬೇತ್ಲೆಹೇಮಿ

ನವನಾದ ದೋದೋವಿನ ಮಗನಾದ ಎಲ್ಹಾನಾನನು;
27ಹರೋರಿನವನಾದ ಶಮ್ಮೋತನು; ಪೆಲೋನ್ಯನಾದ
ಹೆಲೆಚನು; 28ತೆಕೋವದವನಾದ ಇಕ್ಕೇಷನ ಮಗನಾದ
ಈರ. ಅನತೋತಿನವನಾದ ಅಬೀಯೆಜರನು. 29ಹುಷ
ತ್ಯನಾದ ಸಿಬ್ಬೈ, ಅಹೋಹಿನವನಾದ ಈಲೈ; 30ನೆಟೋಫದ
ಮಹರೈ, ನೆಟೋಫದ ಬಾಣನ ಮಗನಾದ ಹೇಲೆದನು.
31ಬೆನ್ಯಾಮೀನ್ ಪ್ರಾಂತ್ಯದ ಗಿಬೆಯದಿಂದ ಬಂದ
ರೀಬೈಯ ಮಗನಾದ ಈತೈ; ಪಿರಾತೋನ್ಯನಾದ ಬೆನಾ
ಯನು. 32ನಹಲೇಗಾಷಿನವನಾದ ಹೂರೈ; ಅರಾಬಾ
ತಗ್ಗಿನವನಾದ ಅಬೀಯೇಲ; 33ಬಹರೂಮ್ಯನಾದ
ಅಜ್ಮಾವೆತ; ಶಾಲ್ಬೋನ್ಯನಾದ ಎಲೆಯಖ್ಬ; 34ಗಿಜೋನ್ಯ
ನಾದ ಹಾಷೇಮನ ಗಂಡುಮಕ್ಕಳು; ಹರಾರ್ಯನಾದ
ಶಾಗಿಯ ಮಗ ಯೋನಾತಾನ; 35ಹರಾರ್ಯನಾದ ಶಾಕಾ
ರನ ಮಗನಾದ ಅಹೀಯಾಮ್; ಊರನ ಮಗನಾದ
ಎಲೀಫಲ್; 36ಮೆಕೆರಾತ್ಯನಾದ ಹೇಫೆರನು; ಪೆಲೋನ್ಯ
ನಾದ ಅಹೀಯ; 37ಕರ್ಮೆಲ್ಯನಾದ ಹೆಚ್ರೋ; ಎಜ್ಬೈಯ
ಮಗನಾದ ನಾರೈ; 38ನಾತಾನನ ಸಹೋದರನಾದ
ಯೋವೇಲ; ಹಗ್ರೀಯ ಮಗನಾದ ಮಿಬ್ಹಾರ್;
39ಅಮ್ಮೋನಿಯನಾದ ಚೆಲೆಕ; ಬೇರೋತ್ ಊರಿನ
ವನಾದ ನಹರೈ. (ಇವನು ಚೆರೂಯಳ ಮಗನಾದ
ಯೋವಾಬನ ಆಯುಧವಾಹಕನಾಗಿದ್ದನು); 40ಇತ್ರೀ
ಯನಾದ ಈರ; ಇತ್ರೀಯನಾದ ಗಾರೇಬ; 41ಹಿತ್ತೀ
ಯನಾದ ಊರೀಯ; ಅಹ್ಲೈಯ ಮಗನಾದ ಜಾಬಾದ್;
42ರೂಬೇನ್ ಕುಲದ ಶೀಜನ ಮಗನಾದ ಅದೀನ
(ಇವನು ರೂಬೇನ್ ಕುಲದವರಿಗೆ ಅಧಿಪತಿಯಾಗಿದ್ದನು
ಮತ್ತು ಮೂವತ್ತು ಮಂದಿ ಪರಾಕ್ರಮಿಗಳಲ್ಲಿ ಒಬ್ಬನಾ
ಗಿದ್ದನು); 43ಮಾಕನ ಮಗನಾದ ಹಾನಾನ್; ಮೆತನಯ
ವನಾದ ಯೋಷಾಫಾಟನು; 44ಅಷ್ಟೆರಾತ್ಯನಾದ ಉಜ್ಜೀ
ಯನು; ಅರೋಯೇರಿನವನಾದ ಹೋತಾಮನ ಗಂಡು
ಮಕ್ಕಳು; ಶಾಮಾ ಮತ್ತು ಯೆಗೀಯೇಲ್; 45ಶಿಮ್ರಿಯ
ಮಗನಾದ ಎದೀಗಯೇಲ; ಎದೀಗಯೇಲನ ತಮ್ಮನೂ
ತೀಚೀಯನೂ ಆದ ಯೋಹ; 46ಮಹವೀಯನಾದ
ಎಲೀಯೇಲ; ಎಲ್ನಾಮನ ಗಂಡುಮಕ್ಕಳಾದ ಯೆರೀಬೈ
ಮತ್ತು ಯೋಷವ್ಯನು; ಮೋವಾಬ್ಯನಾದ ಇತ್ಮ;
47ಎಲೀಯೇಲ್, ಓಬೇದ್, ಮೆಚೋಬಾಯನಾದ
ಯಾಸೀಯೇಲ್.

## ದಾವೀದನೊಂದಿಗೆ ಸೇರಿದ ಪರಾಕ್ರಮಶಾಲಿಗಳು

12 ದಾವೀದನು ಚಿಕ್ಲಗಿನಲ್ಲಿದ್ದಾಗ ಕೆಲವು ಪರಾಕ್ರ
ಮಶಾಲಿಗಳು ಬಂದು ದಾವೀದನೊಂದಿಗೆ
ಸೇರಿಕೊಂಡರು. ಕೀಷನ ಮಗನಾದ ಸೌಲನಿಂದ ತಪ್ಪಿಸಿ
ಕೊಳ್ಳಲು ದಾವೀದನು ಚಿಕ್ಲಗಿನಲ್ಲಿ ಅಡಗಿಕೊಂಡಿದ್ದನು.
ಇವರು ಯುದ್ಧದಲ್ಲಿ ದಾವೀದನಿಗೆ ನೆರವಾದರು.
2ಇವರು ತಮ್ಮ ಎಡಗೈಯಿಂದಲೂ ಬಲಗೈಯಿಂದಲೂ
ಬಿಲ್ಲುಗಳಿಂದ ಬಾಣಗಳನ್ನೂ ಕವಣೆಗಳಿಂದ ಕಲ್ಲು
ಗಳನ್ನೂ ಗುರಿಯಿಟ್ಟು ಹೊಡೆಯ ಬಲ್ಲವರಾಗಿದ್ದರು.
ಇವರೆಲ್ಲರೂ ಬೆನ್ಯಾಮೀನನ ಕುಲದವನಾದ ಸೌಲನ
ಕುಟುಂಬದವರು. ಅವರ ಹೆಸರುಗಳು ಇಂತಿವೆ:

3ಅವರ ನಾಯಕರು ಅಹೀಯೆಜೆರ್ ಮತ್ತು
ಯೋವಾಷ್ (ಇವರಿಬ್ಬರೂ ಗಿಬೆಯದವನಾದ ಹಷ್ಷೆ
ಮಾಹನ ಗಂಡುಮಕ್ಕಳು); ಅಜ್ಮಾವೆತನ ಗಂಡು
ಮಕ್ಕಳಾದ ಯೆಜೀಯೇಲ್ ಮತ್ತು ಪೆಲೆಟ; ಅನತೋತ್
ಊರಿನವರಾದ ಬೆರಾಕಾ ಮತ್ತು ಯೇಹು. 4ಗಿಬ್ಯೋನ್
ಊರಿನವನಾದ ಇಷ್ಮಾಯನು. (ಇವನು ಮೂರು ಮಂದಿ
ಪರಾಕ್ರಮಶಾಲಿಗಳಲ್ಲಿ ಒಬ್ಬನಾಗಿದ್ದನು. ಅಲ್ಲದೆ ಅವರ
ನಾಯಕನಾಗಿದ್ದನು.) ಯೆರೆಮೀಯ, ಯಹಜೀ
ಯೇಲ್, ಯೋಹಾನಾನ್ ಮತ್ತು ಯೋಜಾಬಾದ್.
ಇವರೆಲ್ಲಾ ಗೆದೆರಾಯರು, 5ಹರೀಫ್ಯದವರಾದ ಎಲ್ಲೂಜೈ,
ಏಯೆರೀಮೋತ್, ಬೆಯಲ್ಯ, ಶೆಮರ್ಯ ಮತ್ತು ಶೆಫಟ್ಯ.
6ಕೋರಹನ ಗೋತ್ರದವರಾದ ಎಲ್ಕಾನ, ಇಷ್ಶೀಯ,
ಅಜರೇಲ್, ಯೋವೆಜೆರ್ ಮತ್ತು ಯಾಷೊಬ್ಬಾಮ.
7ಗೆದೋರ್ ಊರಿನವನಾದ ಯೆರೋಹಾಮನ ಗಂಡು
ಮಕ್ಕಳಾದ ಯೋವೇಲ ಮತ್ತು ಜೆಬದ್ಯ.

## ಗಾದ್ಯರು

8ಅರಣ್ಯದಲ್ಲಿದ್ದ ಕೋಟೆಯಲ್ಲಿ ಗಾದ್‌ಕುಲದ ಕೆಲ
ವರು ದಾವೀದನನ್ನು ಸೇರಿಕೊಂಡರು. ಇವರು ಯುದ್ಧ
ದಲ್ಲಿ ನುರಿತ ಸೈನಿಕರಾಗಿದ್ದರು. ಈಟಿ ಬರ್ಜಿಗಳಲ್ಲಿ
ಪರಿಣಿತರು; ಸಿಂಹಗಳಂತೆ ಕ್ರೂರಿಗಳು; ಬೆಟ್ಟದ ಮೇಲೆ
ಜಿಂಕೆಯ ತರಹ ವೇಗವಾಗಿ ಓಡಬಲ್ಲವರು.

9ಗಾದ್‌ಕುಲದ ಸೈನ್ಯಾಧಿಕಾರಿ ಏಜೆರ; ಎರಡನೆಯ ಅಧಿ
ಕಾರಿ ಓಬದ್ಯ; ಎಲೀಯಾಬನು ಮೂರನೆಯ ಅಧಿಕಾರಿ;
10ನಾಲ್ಕನೆಯ ಅಧಿಕಾರಿ ಮಷ್ಮನ್ನ; ಐದನೆಯ ಅಧಿಕಾರಿ
ಯೆರೆಮೀಯ; 11ಆರನೆಯ ಅಧಿಕಾರಿ ಅತ್ತೈ; ಏಳನೆಯ
ಅಧಿಕಾರಿ ಎಲೀಯೇಲ; 12ಎಂಟನೆಯ ಅಧಿಕಾರಿ
ಯೋಹಾನಾನ; ಒಂಭತ್ತನೆಯ ಅಧಿಕಾರಿ ಎಲ್ಜಾಬಾದ;
13ಹತ್ತನೆಯ ಅಧಿಕಾರಿ ಯೆರೆಮೀಯ; ಹನ್ನೊಂದನೆಯ
ಅಧಿಕಾರಿ ಮಕ್ಬನ್ನೈ.

14ಇವರೆಲ್ಲಾ ಗಾದ್ಯರ ಸೇನಾಧಿಪತಿಗಳಾಗಿದ್ದರು. ಇವ
ರಲ್ಲಿ ಅತಿಬಲಹೀನನಾದವನು ನೂರು ಮಂದಿ ವೈರಿಗ
ಳೊಂದಿಗೆ ಕಾದಾಡಲು ಶಕ್ತನಾಗಿದ್ದನು. ಅವರಲ್ಲಿ
ಎಲ್ಲರಿಗಿಂತ ಪರಾಕ್ರಮಿಯು ಒಂದು ಸಾವಿರ ವೈರಿಗ
ಳೊಂದಿಗೆ ಕಾದಾಡಲು ಶಕ್ತನು. 15ಜೋರ್ಡನ್
ನದಿಯು ದಡಮೀರಿ ಹರಿಯುತ್ತಿರುವಾಗ ಗಾದ್ ಕುಲ
ದವರು ಅದನ್ನು ದಾಟಿ ಆಚೆಪ್ರದೇಶದಲ್ಲಿ ವಾಸವಾಗಿದ್ದ

ಜನರನ್ನೆಲ್ಲಾ ಪೂರ್ವಕ್ಕೂ ಪಶ್ಚಿಮಕ್ಕೂ ಓಡಿಸಿ ಅವರ ಸ್ಥಳವನ್ನು ಆಕ್ರಮಿಸಿಕೊಂಡರು.

### ದಾವೀದನೊಂದಿಗೆ ಸೇರಿದ್ದ ಇತರ ಸೈನಿಕರು

16ಬೆನ್ಯಾಮೀನ್ ಮತ್ತು ಯೆಹೂದ ಕುಲದ ಇತರ
ಜನರೂ ದಾವೀದನ ಕೋಟೆಯಲ್ಲಿ ದಾವೀದನೊಂದಿಗೆ
ಸೇರಿಕೊಂಡರು. 17ಅವರನ್ನು ಎದುರುಗೊಳ್ಳಲು ದಾವೀ
ದನು ಹೊರಬಂದು, ‘‘ನೀವು ಸಮಾಧಾನದಿಂದ ನನಗೆ ಸಹಾಯಮಾಡಲು ಬಂದಿದ್ದರೆ ನಿಮ್ಮನ್ನು ಸ್ವಾಗತಿಸುತ್ತೇನೆ. ಆದರೆ ನೀವು ನನ್ನ ಮೇಲೆ ಹೊಂಚುಹಾಕಲು ಬಂದಿರುವುದಾದರೆ ನಾನು ನಿರಪರಾಧಿಯಾಗಿರುವ ಕಾರಣ ನಮ್ಮ ಪೂರ್ವಿಕರ ದೇವರು ನಿಮ್ಮನ್ನು ಶಿಕ್ಷಿಸಲಿ’’ ಎಂದು ಹೇಳಿದನು.

18ಮೂವತ್ತು ಮಂದಿ ಶೂರರ ನಾಯಕನಾದ ಅಮಾಸೈಯು ಆತ್ಮನಿಂದ ತುಂಬಿದವನಾಗಿ ಹೇಳಿದ್ದೇನೆಂದರೆ:

‘‘ದಾವೀದನೇ, ನಾವು ನಿನ್ನವರು. ಇಷಯನ ಮಗನೇ, ನಾವು ನಿನಗೆ ಸೇರಿದವರು; ನಿನಗೆ ಸಮಾಧಾನ ಕೋರುವವರು; ನಿನಗೆ ಸಹಾಯ ಮಾಡುವವರಿಗೆ ಸಮಾಧಾನ ಕೋರುವೆವು; ಯಾಕೆಂದರೆ ನಿನ್ನ ದೇವರು ನಿನಗೆ ಸಹಾಯಮಾಡುತ್ತಿದ್ದಾನೆ.’’

ದಾವೀದನು ಇವರನ್ನು ಸ್ವಾಗತಿಸಿ ತನ್ನ ಸೈನ್ಯಾಧಿಪತಿಗಳನ್ನಾಗಿ ಮಾಡಿದನು.

19ಮನಸ್ಸೆಕುಲದಿಂದಲೂ ಕೆಲವರು ದಾವೀದನನ್ನು ಸೇರಿಕೊಂಡರು. ದಾವೀದನು ಸೌಲನೊಂದಿಗೆ ಯುದ್ಧ ಮಾಡಲು ಫಿಲಿಷ್ಟಿಯರೊಂದಿಗೆ ಸೇರಿಕೊಂಡಾಗ ಮನಸ್ಸೆಯವರು ದಾವೀದನ ಬಳಿಗೆ ಬಂದರು. ದಾವೀದನೂ ಅವನ ಜನರೂ ನಿಜವಾಗಿಯೂ ಫಿಲಿಷ್ಟಿಯರಿಗೆ ಸಹಾಯಮಾಡಿರಲಿಲ್ಲ. ಫಿಲಿಷ್ಟಿಯ ಪ್ರಧಾನರು ದಾವೀದನು ಯುದ್ಧಕ್ಕೆ ಬರಬಾರದೆಂದು ಹೇಳಿ ಹಿಂದಕ್ಕೆ ಕಳುಹಿಸಿದರು. ‘‘ಇವನು ತನ್ನ ಅರಸನೊಟ್ಟಿಗೆ ಸೇರಿದರೆ ನಮ್ಮ ರುಂಡಗಳೇ ಕತ್ತರಿಸಲ್ಪಡುವವು’’ ಎಂದರು.
20ದಾವೀದನು ಚಿಕ್ಲಗಿನಲ್ಲಿ ವಾಸವಾಗಿದ್ದಾಗ ಅವ
ನೊಂದಿಗೆ ಸೇರಿದ ಮನಸ್ಸೆಕುಲದವರು ಯಾರೆಂದರೆ; ಅದ್ನ, ಯೋಜಾಬಾದ್, ಎದೀಗಯೇಲ್, ಮೀಕಾಯೇಲ್, ಯೋಜಾಬಾದ್, ಎಲೀಹೂ ಮತ್ತು ಚಿಲ್ಲತೈ. ಇವರೆಲ್ಲರೂ ಮನಸ್ಸೆಕುಲದ ಮುಖ್ಯಾಧಿಕಾರಿಗಳಾ
ಗಿದ್ದರು. 21ದಾವೀದನು ದುಷ್ಟ ಜನರ ವಿರುದ್ಧವಾಗಿ
ಮಾಡಿದ ಯುದ್ಧದಲ್ಲಿ ಅವರು ಸಹಾಯಮಾಡಿದರು. ಈ ದುಷ್ಟ ಜನರು ದೇಶದಲ್ಲಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹೋಗುತ್ತಾ ದರೋಡೆ ಮಾಡುತ್ತಿದ್ದರು. ಮನಸ್ಸೆಕುಲದಿಂದ ಸೇರಿದ ಜನರೆಲ್ಲಾ ಧೈರ್ಯಶಾಲಿಗಳಾಗಿದ್ದರು. ಅವರು ದಾವೀದನ ಸೈನ್ಯದಲ್ಲಿ ಅಧಿಕಾರಿಗಳಾದರು.

22ದಿನದಿಂದ ದಿನಕ್ಕೆ ಹೆಚ್ಚೆಚ್ಚು ಜನರು ಬಂದು ದಾವೀದನನ್ನು ಸೇರಿಕೊಂಡಿದ್ದರಿಂದ ದಾವೀದನ ಸೈನ್ಯವು ಬಲಗೊಂಡಿತು.

### ಹೆಬ್ರೋನಿನಲ್ಲಿ ಸೇರಿದ ಇತರ ಜನರು

23ದಾವೀದನು ಹೆಬ್ರೋನಿನಲ್ಲಿದ್ದಾಗ ಯುದ್ಧಸನ್ನದ್ಧ
ರಾಗಿದ್ದವರು ದಾವೀದನಿಗೆ ಸೌಲನ ರಾಜ್ಯವನ್ನು ಕೊಡಲು ಬಂದರು. ಇದು ಯೆಹೋವನು ಮುಂತಿಳಿಸಿದಂತೆ ಆಯಿತು. ಅವರ ಸಂಖ್ಯೆಯು ಹೀಗಿದೆ:
24ಯೆಹೂದಕುಲದಿಂದ ಆರು ಸಾವಿರದ ಎಂಟನೂರು
ಮಂದಿ. ಅವರು ಈಟಿ ಮತ್ತು ಗುರಾಣಿಗಳನ್ನು ಹಿಡಿದ ಸೈನಿಕರಾಗಿದ್ದರು.

25ಸಿಮೆಯೋನ್‌ಕುಲದಿಂದ ಏಳು ಸಾವಿರದ ನೂರು ಮಂದಿ.

26ಲೇವಿಕುಲದಿಂದ ನಾಲ್ಕು ಸಾವಿರದ ಆರುನೂರು ಮಂದಿ.

27ಯೆಹೋಯಾದಾವನು ಅವರಲ್ಲಿದ್ದನು. ಇವನು
ಆರೋನನ ಕುಲಪ್ರಧಾನನಾಗಿದ್ದನು. ಇವನೊಂದಿಗೆ
ಮೂರು ಸಾವಿರದ ಏಳುನೂರು ಮಂದಿ. 28ಆ ಗುಂಪಿನಲ್ಲಿ
ಚಾದೋಕನೂ ಇದ್ದನು. ಇವನೂ ಪರಾಕ್ರಮಶಾಲಿಯಾಗಿದ್ದನು. ಇವನು ತನ್ನ ಇಪ್ಪತ್ತೆರಡು ಮಂದಿ ಅಧಿಕಾರಿಗಳೊಂದಿಗೆ ಸೇರಿದನು.

29ಬೆನ್ಯಾಮೀನ್‌ಕುಲದಿಂದ ಮೂರು ಸಾವಿರ ಮಂದಿ ಇದ್ದರು. ಇವರೆಲ್ಲಾ ಸೌಲನ ಸಂಬಂಧಿಕರು. ಇವರಲ್ಲಿ ಬಹು ಮಂದಿ ಸೌಲನು ಜೀವಿಸಿರುವಾಗ ಅವನೊಂದಿಗಿದ್ದರು.

30ಎಫ್ರಾಯೀಮ್‌ಕುಲದಿಂದ ಇಪ್ಪತ್ತು ಸಾವಿರದ ಎಂಟನೂರು ಮಂದಿ ಇದ್ದರು. ಇವರೆಲ್ಲರೂ ಧೈರ್ಯಶಾಲಿ ಸೈನಿಕರು ಮತ್ತು ತಮ್ಮ ಕುಲದವರಿಗೆ ನಾಯಕರಾಗಿದ್ದರು.

31ಮನಸ್ಸೆಯ ಅರ್ಧಕುಲದಿಂದ ಹದಿನೆಂಟು ಸಾವಿರ ಮಂದಿ ಇದ್ದರು. ದಾವೀದನನ್ನು ಅರಸನನ್ನಾಗಿ ಮಾಡಲು ಇವರನ್ನು ಹೆಸರುಹೆಸರಾಗಿ ಕರೆಸಲಾಗಿತ್ತು.

32ಇಸ್ಸಾಕಾರ್‌ಕುಲದಿಂದ ಇನ್ನೂರು ಮಂದಿ ಜ್ಞಾನಿಗಳು ಬಂದಿದ್ದರು. ಇವರು ಸಮಯೋಚಿತ ಜ್ಞಾನವುಳ್ಳವರಾಗಿದ್ದರು ಮತ್ತು ಇಸ್ರೇಲರಿಗೆ ಯೋಗ್ಯವಾದದ್ದನ್ನು ತಿಳಿದವರಾಗಿದ್ದರು; ಇವರ ಸಂಬಂಧಿಕರೂ ಇವರೊಂದಿಗಿದ್ದರು ಮತ್ತು ಇವರ ಆಜ್ಞೆಗೆ ಒಳಪಟ್ಟವರೂ ಆಗಿದ್ದರು.

33ಜೆಬುಲೂನ್ ಕುಲದಿಂದ ಐವತ್ತು ಸಾವಿರ ನುರಿತ ಸೈನಿಕರು ಬಂದರು. ಅವರು ಎಲ್ಲಾ ತರದ

ಆಯುಧಗಳನ್ನು ಉಪಯೋಗಿಸಲು ತರಬೇತಿ ಹೊಂದಿ
ದವರು. ಇವರು ದಾವೀದನಿಗೆ ನಂಬಿಗಸ್ತರಾಗಿದ್ದರು.
[34]ನಫ್ತಾಲಿಕುಲದಿಂದ ಒಂದು ಸಾವಿರ ಮಂದಿ ಅಧಿಪತಿ
ಗಳು ಮತ್ತು ಮೂವತ್ತೇಳು ಸಾವಿರ ಮಂದಿ ಸೈನಿಕರು
ಇದ್ದರು. ಇವರೆಲ್ಲಾ ಈಟಿ ಮತ್ತು ಗುರಾಣಿಗಳನ್ನು ಹಿಡಿದ
ಸೈನಿಕರಾಗಿದ್ದರು.
[35]ದಾನ್‌ಕುಲದಿಂದ ಇಪ್ಪತ್ತೆಂಟು ಸಾವಿರದ ಆರು
ನೂರು ಮಂದಿ ಯುದ್ಧಕ್ಕೆ ತಯಾರಾದವರು ಇದ್ದರು.
[36]ಅಶೇರ್‌ಕುಲದಿಂದ ನಲವತ್ತು ಸಾವಿರ ಮಂದಿ
ಯುದ್ಧಕ್ಕೆ ತಯಾರಾದವರು ಇದ್ದರು.
[37]ಜೋರ್ಡನ್ ಹೊಳೆಯ ಪೂರ್ವಪ್ರಾಂತ್ಯದಲ್ಲಿದ್ದ
ರೂಬೇನ್, ಗಾದ್ ಮತ್ತು ಮನಸ್ಸೆಯ ಅರ್ಧಕುಲ
ಗಳಿಂದ ಒಂದುಲಕ್ಷದ ಇಪ್ಪತ್ತುಸಾವಿರ ಮಂದಿ. ಇವರು
ಎಲ್ಲಾ ತರದ ಆಯುಧಗಳಲ್ಲಿ ಪರಿಣತರಾಗಿದ್ದರು.
[38]ಇವರೆಲ್ಲರೂ ಧೈರ್ಯಶಾಲಿ ಯೋಧರಾಗಿದ್ದರು.
ಇವರೆಲ್ಲಾ ದಾವೀದನನ್ನು ಅರಸನನ್ನಾಗಿ ಮಾಡುವ
ಉದ್ದೇಶದಿಂದ ಹೆಬ್ರೋನಿಗೆ ಬಂದರು. ದಾವೀದನು
ತಮ್ಮ ಅರಸನಾಗುವುದಕ್ಕೆ ಇಸ್ರೇಲಿನ ಬೇರೆ ಜನರೆಲ್ಲರೂ
ಒಪ್ಪಿಗೆ ಕೊಟ್ಟರು. [39]ಈ ಜನರೆಲ್ಲಾ ದಾವೀದನೊಂದಿಗೆ
ಮೂರು ದಿನಗಳನ್ನು ಕಳೆದರು. ಅವರ ಕುಟುಂಬದವರು
ತಯಾರಿಸಿದ್ದ ಆಹಾರವನ್ನು ಅವರು ಊಟಮಾಡಿದರು.
[40]ಇದಲ್ಲದೆ ಇವರ ನೆರೆಹೊರೆಯವರಾದ ಇಸ್ಸಾಕಾರ್,
ನಫ್ತಾಲಿ, ಜೆಬುಲೂನ್ ಕುಲದವರು ಸಹ ಅಡಿಗೆ ಮಾಡಿಸಿ
ಒಂಟೆಗಳ, ಹೇಸರಕತ್ತೆಗಳ, ಎತ್ತುಗಳ ಮತ್ತು ದನಕರುಗಳ
ಮೇಲೆ ಹೇರಿಕೊಂಡು ಬಂದು ಒದಗಿಸಿದರು. ಅವರು
ಬೇಕಾದಷ್ಟು ಗೋಧಿಹಿಟ್ಟನ್ನು, ಒಣಅಂಜೂರವನ್ನು,
ದ್ರಾಕ್ಷಿಯನ್ನು, ದ್ರಾಕ್ಷಾರಸವನ್ನು, ಎಣ್ಣೆಯನ್ನು, ದನಕರು
ಗಳನ್ನು ಮತ್ತು ಕುರಿಗಳನ್ನು ಒದಗಿಸಿದರು. ಇಸ್ರೇಲ
ರೆಲ್ಲರೂ ಹರ್ಷದಿಂದ ತುಂಬಿದರು.

### ಒಡಂಬಡಿಕೆಯ ಪೆಟ್ಟಿಗೆಯನ್ನು ಹಿಂದಕ್ಕೆ ತರಲು ಮಾಡಿದ ತೀರ್ಮಾನ

13 ದಾವೀದನು ತನ್ನ ಎಲ್ಲಾ ಸೇನಾಧಿಪತಿಗ
ಳೊಂದಿಗೆ ಮಾತನಾಡಿದನು. ಅವನು ಸಹಸ್ರಾಧಿ
ಪತಿಗಳೊಂದಿಗೆ ಶತಾಧಿಪತಿಗಳೊಂದಿಗೆ ಮತ್ತು ಪ್ರತಿ
ಯೊಬ್ಬ ನಾಯಕನೊಂದಿಗೆ ಚರ್ಚಿಸಿದನು. [2]ಆಮೇಲೆ
ಇಸ್ರೇಲ್ ಜನರನ್ನು ಕರೆದು ಅವರಿಗೆ ಹೀಗಂದನು,
''ಇದು ನಿಮಗೆ ಒಳ್ಳೆಯ ಆಲೋಚನೆ ಎನಿಸಿದರೆ ಮತ್ತು
ಇದು ಯೆಹೋವನ ಚಿತ್ತಕ್ಕನುಸಾರವಾಗಿದ್ದರೆ, ಇಸ್ರೇಲಿನ
ಎಲ್ಲಾ ಸ್ಥಳಗಳಲ್ಲಿರುವ ನಮ್ಮ ಸಹೋದರರಿಗೆ ಒಂದು
ಸಂದೇಶವನ್ನು ಕಳುಹಿಸೋಣ. ನಮ್ಮ ಸಹೋದರ
ರೊಂದಿಗೆ ಊರುಗಳಲ್ಲಿಯೂ ಊರುಗಳ ಸಮೀಪ
ದಲ್ಲಿರುವ ಹೊಲಗಳಲ್ಲಿಯೂ ವಾಸವಾಗಿರುವ ಯಾಜಕ
ರಿಗೂ ಲೇವಿಯರಿಗೂ ಈ ಸಂದೇಶವನ್ನು ಕಳುಹಿಸಿ
ಕೊಡೋಣ; 'ನೀವು ಬಂದು ನಮ್ಮೊಂದಿಗೆ ಸೇರಿಕೊಳ್ಳಿ.
[3]ನಾವೆಲ್ಲರೂ ಹೋಗಿ ಒಡಂಬಡಿಕೆಯ ಪೆಟ್ಟಿಗೆಯನ್ನು
ಜೆರುಸಲೇಮಿಗೆ ತರೋಣ. ಸೌಲನು ಅರಸನಾಗಿದ್ದಾಗ
ನಾವು ಒಡಂಬಡಿಕೆಯ ಪೆಟ್ಟಿಗೆಯ ಬಗ್ಗೆ ಆಸಕ್ತಿ
ವಹಿಸಲಿಲ್ಲ.'' [4]ಆದ್ದರಿಂದ ಇಸ್ರೇಲರೆಲ್ಲರೂ ದಾವೀದನ
ಸಲಹೆಗೆ ಒಪ್ಪಿದರು ಮತ್ತು ಅದು ಯೋಗ್ಯವಾದದ್ದೆಂದು
ತೀರ್ಮಾನಿಸಿದರು.
[5]ಆಗ ದಾವೀದನು ಈಜಿಪ್ಟಿನ ಶೀಹೋರ್ ನದಿಯಿಂದ
ಹಿಡಿದು ಲೆಬೊಹಮಾತ್ ಪಟ್ಟಣದ ತನಕ ಇದ್ದ ಇಸ್ರೇ
ಲರನ್ನೆಲ್ಲಾ ಒಟ್ಟು ಸೇರಿಸಿದನು; ಅವರೆಲ್ಲರೂ
ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು ಕಿರ್ಯ
ತ್ಯಾರೀಮಿನಿಂದ ತರಲು ಹೊರಟರು. [6]ಇಸ್ರೇಲಿನ ಎಲ್ಲಾ
ಜನರು ದಾವೀದನೊಂದಿಗೆ ಯೆಹೂದದ ಬಾಳಾ ಎಂಬ
ಸ್ಥಳಕ್ಕೆ (ಕೀರ್ಯಾತ್ಯಾರೀಮಿನ ಇನ್ನೊಂದು ಹೆಸರು
ಬಾಳಾ.) ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯನ್ನು
ತರಲು ನಡೆದರು. ಆತನು ಕೆರೂಬಿಗಳ ನಡುವೆ ಆಸೀನ
ನಾಗಿರುತ್ತಾನೆ. ಆ ಪೆಟ್ಟಿಗೆಯು ಯೆಹೋವನ ಹೆಸರಿನಲ್ಲಿ
ಕರೆಯಲ್ಪಡುತ್ತದೆ.
[7]ಅಬೀನಾದಾಬನ ಮನೆಯಲ್ಲಿದ್ದ ಒಡಂಬಡಿಕೆಯ
ಪೆಟ್ಟಿಗೆಯನ್ನು ಜನರು ಎತ್ತಿ ಒಂದು ಹೊಸ ಬಂಡಿ
ಯಲ್ಲಿಟ್ಟರು. ಉಜ್ಜನೂ ಅಹಿಯೋವನೂ ಆ ಬಂಡಿ
ಯನ್ನು ನಡೆಸಿದರು.
[8]ದಾವೀದನೂ ಇಸ್ರೇಲರೂ ದೇವರ ಮುಂದೆ
ಸಂತೋಷದಿಂದ ಹಾಡುತ್ತಾ ಕುಣಿಯುತ್ತಾ ಹೋದರು.
ಹಾರ್ಪ್‌ವಾದ್ಯವನ್ನು, ಲೈರ್ ವಾದ್ಯವನ್ನು, ತಬಲವನ್ನು,
ತಾಳವನ್ನು ಮತ್ತು ತುತ್ತೂರಿಯನ್ನು ಬಾರಿಸುತ್ತಾ
ಹಾಡುತ್ತಾ ದೇವರಿಗೆ ಸ್ತೋತ್ರ ಮಾಡಿದರು.
[9]ಅವರು ಕೀದೋನನ ಕಣಕ್ಕೆ ಬಂದಾಗ ಗಾಡಿ
ಎಳೆಯುತ್ತಿದ್ದ ಎತ್ತುಗಳು ಮುಗ್ಗರಿಸಿದವು. ಆಗ ಯೆಹೋ
ವನ ಒಡಂಬಡಿಕೆಯ ಪೆಟ್ಟಿಗೆಯು ಬೀಳುವುದರಲ್ಲಿತ್ತು.
ಉಜ್ಜನು ತನ್ನ ಕೈಯನ್ನು ಚಾಚಿ ಪೆಟ್ಟಿಗೆಯನ್ನು ಹಿಡಿಯಲು
ಹೋದನು. [10]ಆದರೆ ಯೆಹೋವನು ಅವನ ಮೇಲೆ
ಕೋಪಗೊಂಡು ಆ ಪವಿತ್ರವಾದ ಪೆಟ್ಟಿಗೆಯನ್ನು ಮುಟ್ಟಿ
ದ್ದಕ್ಕೆ ಅವನನ್ನು ಅಲ್ಲಿಯೇ ಸಾಯಿಸಿದನು. [11]ದಾವೀದನು
ಇದನ್ನು ನೋಡಿ ತುಂಬಾ ಬೇಸರಗೊಂಡನು. ಆ
ಸಮಯದಿಂದ ಈ ತನಕವೂ ಆ ಸ್ಥಳಕ್ಕೆ ''ಪೆರೆಚ್ ಉಜ್ಜ''
ಎಂಬ ಹೆಸರೇ ಇದೆ.
[12]ಆ ದಿವಸದಲ್ಲಿ ದಾವೀದನು ಯೆಹೋವನಿಗೆ ತುಂಬಾ
ಭಯಪಟ್ಟು, ''ನಾನು ಯೆಹೋವನ ಒಡಂಬಡಿಕೆಯ
ಪೆಟ್ಟಿಗೆಯನ್ನು ಜೆರುಸಲೇಮಿಗೆ ತರಲು ಆಗುವುದಿಲ್ಲ''
ಅಂದುಕೊಂಡನು. [13]ದಾವೀದನು ದೇವರಿಗೆ ಭಯ
ಪಟ್ಟನು. ದೇವರ ಒಡಂಬಡಿಕೆಯ ಪೆಟ್ಟಿಗೆಯನ್ನು

ಓಬೇದೆದೋಮನ ಮನೆಯಲ್ಲಿಯೇ ಬಿಟ್ಟನು. ಓಬೇದೆ
ದೋಮನು ಗತ್ ಊರಿನವನು. 14ಆ ಮನೆಯಲ್ಲಿ
ದೇವರ ಒಡಂಬಡಿಕೆಯ ಪೆಟ್ಟಿಗೆಯು ಮೂರು ತಿಂಗಳ
ಕಾಲವಿತ್ತು. ಯೆಹೋವನು ಆ ಮನೆಯನ್ನು ಆಶೀರ್ವದಿಸಿ
ಅಭಿವೃದ್ಧಿಪಡಿಸಿದನು.

### ದಾವೀದನ ರಾಜ್ಯವಿಸ್ತರಣೆ

14 ತೂರ್ ಪಟ್ಟಣದ ರಾಜನಾದ ಹೀರಾಮನು
ದಾವೀದನ ಬಳಿಗೆ ತನ್ನ ಸಂದೇಶಕರನ್ನು
ಕಳುಹಿಸಿದನು. ಇವರೊಂದಿಗೆ ದೇವದಾರು ಮರದ
ತೊಲೆಗಳನ್ನು, ಕಲ್ಲುಕುಟಿಗರನ್ನು ಮತ್ತು ಬಡಗಿಯರನ್ನು
ಕಳುಹಿಸಿದನು. ದಾವೀದನಿಗೊಂದು ಮನೆಯನ್ನು
ಕಟ್ಟಲು ಇವರನ್ನು ಕಳುಹಿಸಿದನು. 2ದೇವರು ತನ್ನನ್ನು
ಇಸ್ರೇಲರ ಅರಸನನ್ನಾಗಿ ಆಗಲೇ ಮಾಡಿದ್ದಾನೆಂದು
ದಾವೀದನಿಗೆ ತಿಳಿದುಬಂತು. ಆತನು ದಾವೀದನ
ಸಾಮ್ರಾಜ್ಯವನ್ನು ವಿಸ್ತರಿಸಿ ಬಲಿಷ್ಠಗೊಳಿಸಿದನು.
ಯೆಹೋವನು ದಾವೀದನನ್ನೂ ಇಸ್ರೇಲರನ್ನೂ ಪ್ರೀತಿ
ಸಿದ್ದರಿಂದ ಹಾಗೆ ಮಾಡಿದನು.

3ಜೆರುಸಲೇಮಿನಲ್ಲಿ ದಾವೀದನು ಇನ್ನೂ ಹಲವು
ಸ್ತ್ರೀಯರನ್ನು ಮದುವೆಯಾದನು. ಅವನಿಗೆ ಅನೇಕ
ಗಂಡುಹೆಣ್ಣು ಮಕ್ಕಳು ಹುಟ್ಟಿದರು. 4ಜೆರುಸಲೇಮಿನಲ್ಲಿ
ಅವನಿಗೆ ಹುಟ್ಟಿದ ಮಕ್ಕಳು ಯಾರೆಂದರೆ: ಶಮ್ಮೂವ,
ಶೋಬಾಬ್, ನಾತಾನ್, ಸೊಲೊಮೋನ, 5ಇಬ್ಹಾರ್,
ಎಲೀಷೂವ, ಎಲ್ಪೆಲೆಟ್, 6ನೋಗಹ, ನೆಫೆಗ್,
ಯಾಫೀಯ, 7ಎಲೀಷಾಮಾ, ಬೇಲ್ಯಾದ ಮತ್ತು ಎಲೀ
ಪೆಲೆಟ್.

### ದಾವೀದನು ಫಿಲಿಷ್ಟಿಯರನ್ನು ಸೋಲಿಸಿದ್ದು

8ದಾವೀದನು ಇಸ್ರೇಲರ ಅರಸನಾಗಿ ಆರಿಸಲ್ಪಟ್ಟಿದ್ದನ್ನು
ಕೇಳಿ ಎಲ್ಲಾ ಫಿಲಿಷ್ಟಿಯರು ಅವನೊಂದಿಗೆ ಯುದ್ಧ
ಮಾಡಲು ಬಂದರು. ದಾವೀದನು ಇದನ್ನು ಅರಿತು
ಯುದ್ಧಸನ್ನದ್ಧನಾಗಿ ಫಿಲಿಷ್ಟಿಯರ ವಿರುದ್ಧವಾಗಿ ಯುದ್ಧಕ್ಕೆ
ಹೊರಟನು. 9ಫಿಲಿಷ್ಟಿಯರು ರೆಫಾಯೀಮ್ ತಗ್ಗಿನಲ್ಲಿ
ವಾಸಿಸುತ್ತಿದ್ದ ಇಸ್ರೇಲರ ಮೇಲೆ ದಾಳಿಮಾಡಿ ಅವರ
ದನ್ನೆಲ್ಲಾ ದೋಚಿಕೊಂಡರು. 10ದಾವೀದನು ಯೆಹೋ
ವನಿಗೆ, ''ನಾನು ಫಿಲಿಷ್ಟಿಯರ ಸಂಗಡ ಯುದ್ಧಕ್ಕೆ ಹೋಗ
ಬಹುದೇ?'' ಎಂದು ವಿಚಾರಿಸಲಾಗಿ ಯೆಹೋವನು
ಅವನಿಗೆ,

''ಹೋಗು, ನಾನು ನಿನಗೆ ಫಿಲಿಷ್ಟಿಯರ ಮೇಲೆ ಜಯ
ಕೊಡುವೆನು'' ಎಂದು ಹೇಳಿದನು.

11ಆಗ ದಾವೀದನೂ ಅವನ ಸಂಗಡಿಗರೂ ಬಾಳ್
ಪೆರಾಚೀಮ್ ಎಂಬ ಸ್ಥಳದವರೆಗೆ ಹೋಗಿ ಫಿಲಿಷ್ಟಿಯ
ರನ್ನು ನಾಶಮಾಡಿದನು. ''ದೇವರು ಕಟ್ಟೆಯೊಡೆದ
ಪ್ರವಾಹದಂತೆ ತನ್ನ ಶತ್ರುಗಳ ಮೇಲೆ ದಾಳಿಮಾಡಿ
ಅವರನ್ನು ನನ್ನ ಮುಖಾಂತರವಾಗಿ ನಾಶಮಾಡಿದ್ದಾನೆ''
ಎಂದು ದಾವೀದನು ಹೇಳಿದನು. ಆದ್ದರಿಂದ ಆ ಸ್ಥಳಕ್ಕೆ
ಬಾಳ್‌ಪೆರಾಚೀಮ್ ಎಂದು ಹೆಸರಾಯಿತು. 12ಫಿಲಿಷ್ಟಿ
ಯರು ತಮ್ಮ ವಿಗ್ರಹಗಳನ್ನು ಅಲ್ಲಿಯೇ ಬಿಟ್ಟು ಓಡಿ
ಹೋಗಿದ್ದರು. ದಾವೀದನು ಅವುಗಳನ್ನೆಲ್ಲಾ ಒಟ್ಟುಸೇರಿಸಿ
ಸುಡಿಸಿಬಿಟ್ಟನು.

### ಫಿಲಿಷ್ಟಿಯರ ಮೇಲೆ ಇನ್ನೊಂದು ಜಯ

13ಫಿಲಿಷ್ಟಿಯರು ಮತ್ತೆ ರೆಫಾಯೀಮ್ ತಗ್ಗಿನಲ್ಲಿ ವಾಸ
ಮಾಡುತ್ತಿದ್ದ ಇಸ್ರೇಲರ ಮೇಲೆ ದಾಳಿಮಾಡಿದರು.
14ದಾವೀದನು ಮತ್ತೆ ಯೆಹೋವನಿಗೆ ಪ್ರಾರ್ಥಿಸಿ ವಿಚಾ
ರಿಸಿದನು. ಯೆಹೋವನು ಅವನ ಪ್ರಾರ್ಥನೆಗೆ
ಉತ್ತರಕೊಟ್ಟು, ''ದಾವೀದನೇ, ಫಿಲಿಷ್ಟಿಯರನ್ನು ಬೆಟ್ಟದ
ಮೇಲೆ ನೀನು ಹಿಂಬಾಲಿಸದಿರು. ಅವರ ಹಿಂದಿನಿಂದ
ಹೋಗಿ ಬಾಲ್ಸಾಮ್ ಮರಗಳ ಹಿಂದೆ ಅವಿತುಕೊಂಡಿರು.
15ಒಬ್ಬ ಕಾವಲುಗಾರನನ್ನು ಮರಕ್ಕೆ ಹತ್ತಿಸು; ಫಿಲಿಷ್ಟಿ
ಯರು ಬರುವ ಸಪ್ಪಳ ಕೇಳಿದೊಡನೆ ಅವರ ಮೇಲೆ
ದಾಳಿಮಾಡು. ನಾನು ನಿನ್ನ ಮುಂದಾಗಿ ಹೋಗಿ
ಫಿಲಿಷ್ಟಿಯರ ಸೈನ್ಯವನ್ನು ಸೋಲಿಸುವೆನು'' ಎಂದು
ಹೇಳಿದನು. 16ಯೆಹೋವನು ಹೇಳಿದಂತೆಯೇ ದಾವೀ
ದನು ಮಾಡಿದನು. ದಾವೀದನೂ ಅವನ ಸೈನಿಕರೂ
ಫಿಲಿಷ್ಟಿಯರನ್ನು ಸೋಲಿಸಿ ಗಿಬ್ಯೋನಿನಿಂದ ಹಿಡಿದು
ಗೆಜೆರ್ ಪಟ್ಟಣದವರೆಗೂ ಅವರನ್ನು ಕೊಲ್ಲುತ್ತಾ
ಹೋದರು. 17ಹೀಗೆ ದಾವೀದನು ಎಲ್ಲಾ ದೇಶಗಳಲ್ಲಿ
ಹೆಸರುವಾಸಿಯಾದನು. ಎಲ್ಲಾ ಜನಾಂಗಗಳವರು
ಅವನಿಗೆ ಭಯಪಡುವಂತೆ ಯೆಹೋವನು ಮಾಡಿದನು.

### ಜೆರುಸಲೇಮಿನಲ್ಲಿ ಒಡಂಬಡಿಕೆಯ ಮಂಜೂಷ

15 ದಾವೀದನಗರದಲ್ಲಿ ದಾವೀದನು ತನಗಾಗಿ
ಮನೆಗಳನ್ನು ಕಟ್ಟಿಸಿದನು. ಆಮೇಲೆ ಅವನು
ಒಡಂಬಡಿಕೆಯ ಪೆಟ್ಟಿಗೆಯನ್ನು ಇಡಲು ಒಂದು ಸ್ಥಳವನ್ನು
ಏರ್ಪಡಿಸಿ ಗುಡಾರವನ್ನು ನಿರ್ಮಿಸಿದನು. 2''ಲೇವಿಯರು
ಮಾತ್ರ ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡು
ಬರಬೇಕು. ಯೆಹೋವನು ಅವರನ್ನೇ ತನ್ನ ನಿರಂತರ
ವಾದ ಸೇವೆಗಾಗಿ ನೇಮಿಸಿದ್ದಾನೆ'' ಎಂದು ದಾವೀದನು
ಹೇಳಿದನು.

3ಎಲ್ಲಾ ಇಸ್ರೇಲರು ಜೆರುಸಲೇಮಿಗೆ ಬರಬೇಕೆಂದು
ದಾವೀದನು ಪ್ರಕಟಿಸಿದನು. ಲೇವಿಯರು ಒಡಂಬ
ಡಿಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡು ದಾವೀದನು
ಸಿದ್ಧಪಡಿಸಿದ್ದ ಸ್ಥಳಕ್ಕೆ ತಂದರು. 4ದಾವೀದನು ಆರೋನನ
ಸಂತತಿಯವರನ್ನೂ ಲೇವಿಯರನ್ನೂ ಕರೆದನು. 5ಕೆಹಾ
ತ್ಯನ ಕುಲದವರಲ್ಲಿ ನೂರಿಪ್ಪತ್ತು ಮಂದಿ; ಊರಿಯೇಲ್

ಇವರ ಮುಖ್ಯಸ್ಥನು. 6ಮೆರಾರೀಯ ಕುಲದವರಲ್ಲಿ
ಇನ್ನೂರಿಪ್ಪತ್ತು ಮಂದಿ; ಇವರ ಮುಖ್ಯಸ್ಥನು ಅಸಾಯನು.
7ಗೇಷೋರ್ಮ್ಯನ ಕುಲದವರಲ್ಲಿ ನೂರಮೂವತ್ತು
ಮಂದಿ; ಅವರ ನಾಯಕನು ಯೋವೇಲ್. 8ಎಲೀಚಾ
ಫಾನಿನ ಕುಲದವರಲ್ಲಿ ಇನ್ನೂರು ಮಂದಿ; ಅವರ
ನಾಯಕನು ಶೆಮಾಯ. 9ಹೆಬ್ರೋನಿನ ಕುಲದವರಲ್ಲಿ
ಎಂಭತ್ತು ಮಂದಿ; ಎಲೀಯೇಲನು ಅವರ ನಾಯಕನು.
10ಉಜ್ಜೀಯೇಲನ ಕುಲದವರಲ್ಲಿ ನೂರಹನ್ನೆರಡು
ಮಂದಿ; ಅಮ್ಮೀನಾದಾಬನು ಅವರ ನಾಯಕ.

## ದಾವೀದನು ಯಾಜಕರೊಂದಿಗೆ ಮತ್ತು ಲೇವಿಯರೊಂದಿಗೆ ಮಾತಾಡಿದ್ದು

11ನಂತರ ದಾವೀದನು ಯಾಜಕರಾದ ಚಾದೋಕ
ನನ್ನು ಮತ್ತು ಎಬ್ಯಾತಾರನನ್ನು ಮತ್ತು ಕೆಳಕಂಡ
ಲೇವಿಯರನ್ನು ಸಹ ಕರೆಸಿದನು: ಊರೀಯೇಲ್,
ಅಸಾಯ, ಯೋವೇಲ್, ಶೆಮಾಯ, ಎಲೀಯೇಲ್
ಮತ್ತು ಅಮ್ಮೀನಾದಾಬ್. 12ದಾವೀದನು ಅವರಿಗೆ,
‘‘ನೀವು ಲೇವಿಕುಲದ ನಾಯಕರು. ನೀವೂ ಉಳಿದ ಲೇವಿ
ಯರೂ ನಿಮ್ಮನ್ನು ಶುದ್ಧಪಡಿಸಿಕೊಳ್ಳಬೇಕು. ಅನಂತರ
ಇಸ್ರೇಲಿನ ದೇವರಾದ ಯೆಹೋವನ ಒಡಂಬಡಿಕೆಯ
ಪೆಟ್ಟಿಗೆಯನ್ನು ನಾನು ಅದಕ್ಕಾಗಿ ಸಿದ್ಧಮಾಡಿರುವ ಸ್ಥಳಕ್ಕೆ
ತರಬೇಕು. 13ಕಳೆದ ಸಲ, ನಾವು ಒಡಂಬಡಿಕೆಯ ಪೆಟ್ಟಿಗೆ
ಯನ್ನು ಹೇಗೆ ತೆಗೆದುಕೊಂಡು ಹೋಗಬೇಕೆಂದು
ಯೆಹೋವನಲ್ಲಿ ವಿಚಾರಿಸಲಿಲ್ಲ. ಲೇವಿಯರಾದ ನೀವು
ಅದನ್ನು ಹೊರಲಿಲ್ಲ. ಆದುದರಿಂದಲೇ ನಮ್ಮ ದೇವರಾದ
ಯೆಹೋವನು ನಮ್ಮನ್ನು ಶಿಕ್ಷಿಸಿದನು’’ ಎಂದು
ಹೇಳಿದನು.
14ಆಗ ಯಾಜಕರೂ ಲೇವಿಯರೂ ತಮ್ಮನ್ನು ಶುದ್ಧೀ
ಮಾಡಿಕೊಂಡರು. ಇಸ್ರೇಲರ ದೇವರಾದ ಯೆಹೋವನ
ಒಡಂಬಡಿಕೆಯ ಪೆಟ್ಟಿಗೆಯನ್ನು ತರಲು ತಮ್ಮನ್ನು
ಸಿದ್ಧಪಡಿಸಿಕೊಂಡರು. 15ಮೋಶೆಯು ಆಜ್ಞಾಪಿಸಿದ್ದ
ಪ್ರಕಾರವೇ ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತು
ಕೊಂಡು ಹೋಗಲು ಬೇಕಾದ ಕೋಲುಗಳನ್ನು ಲೇವಿ
ಯರು ಸಿದ್ಧಪಡಿಸಿದರು. ಯೆಹೋವನು ಹೇಳಿ
ದ್ದಂತೆಯೇ ಅವರು ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋದರು.

## ಗಾಯಕರು

16ದಾವೀದನು ಲೇವಿಯರಿಗೆ ತಮ್ಮ ಸಹೋದರರಾದ
ಗಾಯಕರನ್ನು ಕರೆದುಕೊಂಡು ಬರಲು ಹೇಳಿದನು.
ಹಾರ್ಪ್‌ವಾದ್ಯಗಳನ್ನು, ಲೈರ್‌ವಾದ್ಯಗಳನ್ನು ಮತ್ತು
ತಾಳಗಳನ್ನು ತಂದು ಆನಂದಗೀತೆಗಳನ್ನು ಹಾಡುವಂತೆ
ಅವರಿಗೆ ತಿಳಿಸಿದನು.

17ಲೇವಿಯರು ಹೋಗಿ ಹೇಮಾನನನ್ನೂ ಅವನ
ಸಹೋದರರನ್ನೂ ಆಸಾಫನನ್ನೂ ಏತಾನನನ್ನೂ ಕರೆ
ತಂದರು. ಹೇಮಾನನು ಯೋವೇಲನ ಮಗ. ಆಸಾಫನು
ಬೆರೆಕ್ಯನ ಮಗ. ಏತಾನನು ಕೂಷಾಯನ ಮಗ. ಇವ
ರೆಲ್ಲಾ ಮೆರಾರೀಯ ಸಂತತಿಯವರು. 18ಲೇವಿಯರ
ಇನ್ನೊಂದು ಗುಂಪು ಇತ್ತು. ಅವರು ಯಾರೆಂದರೆ:
ಜೆಕರ್ಯ, ಬೇನ್, ಯಾಜೀಯೇಲ್, ಶೆಮೀರಾ
ಮೋತ್, ಯೆಹೀಯೇಲ್, ಉನ್ನೀ, ಎಲೀಯಾಬ್,
ಬೆನಾಯ, ಮಾಸೇಯ, ಮತ್ತಿತ್ಯ, ಎಲೀಫೆಲೇಹು,
ಮಿಕ್ನೇಯ, ಓಬೇದೆದೋಮ್ ಮತ್ತು ಯೆಗೀಯೇಲ್.
ಇವರೆಲ್ಲಾ ಲೇವಿಯರ ಕಾವಲುಗಾರರಾಗಿದ್ದರು.
19ಗಾಯಕರಾದ ಹೇಮಾನ್, ಆಸಾಫ್ ಮತ್ತು
ಏತಾನ್ ಕಂಚಿನ ತಾಳವನ್ನು ಬಾರಿಸಿದರು. 20ಜೆಕರ್ಯ,
ಅಜೀಯೇಲ್, ಶೆಮೀರಾಮೋತ್, ಯೆಹೀಯೇಲ್,
ಉನ್ನೀ, ಎಲೀಯಾಬ್, ಮಾಸೇಯ ಮತ್ತು ಬೆನಾಯ
ಅಲಾಮೋತ್ ಇವರುಗಳು ಹಾರ್ಪ್ ವಾದ್ಯಗಳನ್ನು
ಬಾರಿಸಿದರು. 21ಮತ್ತಿತ್ಯ, ಎಲೀಫೆಲೇಹು, ಮಿಕ್ನೇಯ,
ಓಬೇದೆದೋಮ್, ಯೆಗೀಯೇಲ್ ಮತ್ತು ಅಜಜ್ಯ
ಇವರುಗಳು ಶೆಮೀನೀತ್ ಹಾರ್ಪ್‌ವಾದ್ಯಗಳನ್ನು ಬಾರಿಸಿ
ದರು. ಇದು ಇವರ ಖಾಯಂ ಕೆಲಸವಾಗಿತ್ತು. 22ಲೇವಿ
ಯರ ನಾಯಕನಾದ ಕೆನನ್ಯನು ಗಾಯಕರ ಮುಖಂಡ
ನಾಗಿದ್ದನು. ಇವನು ತುಂಬಾ ಅನುಭವಶಾಲಿ
ಯಾಗಿದ್ದನು.
23ಬೆರೆಕ್ಯನು ಮತ್ತು ಎಲ್ಕಾನನು ಒಡಂಬಡಿಕೆಪೆಟ್ಟಿಗೆಯ
ಕಾವಲುಗಾರರಾಗಿದ್ದರು. 24ಯಾಜಕರಾದ ಶೆಬನ್ಯ,
ಯೋಷಾಫಾಟ್, ನೆತನೇಲ್, ಅಮಾಸೈ, ಜೆಕರ್ಯ,
ಬೆನಾಯ ಮತ್ತು ಎಲೀಯೆಜೆರ್ ಇವರಿಗೆ ಯೆಹೋವನ
ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತುಕೊಂಡು
ಹೋಗುವಾಗ ತುತ್ತೂರಿ ಊದುವ ಕೆಲಸವನ್ನು
ಕೊಟ್ಟನು. ಓಬೇದೆದೋಮ್ ಮತ್ತು ಯೆಹೀಯ ಒಡಂ
ಬಡಿಕೆಯ ಪೆಟ್ಟಿಗೆಗೆ ಕಾವಲುಗಾರರಾದರು.
25ದಾವೀದನೂ ಇಸ್ರೇಲಿನ ಹಿರಿಯರೂ ಮುಖಂ
ಡರೂ ಒಡಂಬಡಿಕೆಯ ಪೆಟ್ಟಿಗೆಯನ್ನು ತರಲು
ಹೋದರು. ಅವರು ಅದನ್ನು ಓಬೇದೆದೋಮನ
ಮನೆಯಿಂದ ಹೊರತಂದರು. ಎಲ್ಲರಿಗೂ ಸಂತೋಷ
ವಾಯಿತು. 26ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತಿದ್ದ
ಲೇವಿಯರಿಗೆ ದೇವರು ಸಹಾಯ ಮಾಡಿದನು. ಅಲ್ಲಿ ಏಳು
ಹೋರಿಗಳನ್ನೂ ಏಳು ಟಗರುಗಳನ್ನೂ ಯಜ್ಞ
ಮಾಡಿದರು. 27ಒಡಂಬಡಿಕೆಯ ಪೆಟ್ಟಿಗೆಯನ್ನು ಹೊತ್ತ
ಯಾಜಕರು ಉತ್ತಮವಾದ ನಾರಿನ ನಿಲುವಂಗಿಗಳನ್ನು
ಧರಿಸಿದ್ದರು. ಕೆನನ್ಯನೂ ಅವನ ಜೊತೆಯಲ್ಲಿದ್ದ
ಗಾಯಕರೆಲ್ಲರೂ ಉತ್ತಮವಾದ ನಾರಿನ ಬಟ್ಟೆಗಳನ್ನು
ಧರಿಸಿದ್ದರು. ದಾವೀದನೂ ಉತ್ತಮವಾದ ನಾರಿನ ಬಟ್ಟೆ

ಧರಿಸಿ, ಉತ್ತಮವಾದ ನಾರಿನಿಂದ ಮಾಡಿದ ಏಫೋದನ್ನು
ಅದರ ಮೇಲೆ ಧರಿಸಿಕೊಂಡಿದ್ದನು.
28ಹೀಗೆ ಎಲ್ಲಾ ಇಸ್ರೇಲರು ದೇವರ ಒಡಂಬಡಿಕೆಯ
ಪೆಟ್ಟಿಗೆಯನ್ನು ಹೊತ್ತುಕೊಂಡು ಬಂದರು. ಅವರು
ಕೊಂಬುಗಳನ್ನೂ ತುತ್ತೂರಿಗಳನ್ನೂ ಊದಿದರು;
ಹಾರ್ಪ್‌ವಾದ್ಯಗಳನ್ನು ಲೈರ್‌ವಾದ್ಯಗಳನ್ನು ಮತ್ತು ತಾಳ
ಗಳನ್ನು ಬಾರಿಸಿದರು; ಆನಂದದಿಂದ ಆರ್ಭಟಿಸಿದರು.
29ದಾವೀದನ ನಗರದಲ್ಲಿ ಮೆರವಣಿಗೆಯು ಬಂದಾಗ
ದಾವೀದನ ಹೆಂಡತಿಯಾದ ಮೀಕಲಳು ಕಿಟಕಿಯಿಂದ
ನೋಡಿದಳು. (ಇವಳು ಸೌಲನ ಮಗಳು.) ದಾವೀದನು
ಕುಣಿಯುತ್ತಾ ಹಾಡುವದನ್ನು ಆಕೆ ಕಂಡಳು. ತನ್ನ ಗಂಡನ
ಮೇಲೆ ಆಕೆಗಿದ್ದ ಗೌರವವು ಕಡಿಮೆಯಾಯಿತು.
ಯಾಕೆಂದರೆ ದಾವೀದನು ಒಬ್ಬ ಸಾಮಾನ್ಯ ವ್ಯಕ್ತಿಯಂತೆ
ಬುದ್ಧಿ ಇಲ್ಲದ ಕೆಲಸ ಮಾಡುತ್ತಿರುವನೆಂದು ಆಕೆಯು
ಅಂದುಕೊಂಡಳು.

16 ಲೇವಿಯರು ಒಡಂಬಡಿಕೆಯ ಪೆಟ್ಟಿಗೆಯನ್ನು
ತಂದು ಅದಕ್ಕಾಗಿ ದಾವೀದನು ನಿರ್ಮಿಸಿದ್ದ
ಗುಡಾರದೊಳಗೆ ಇಟ್ಟರು. ಅನಂತರ ಸರ್ವಾಂಗಹೋಮ
ಮತ್ತು ಸಮಾಧಾನಯಜ್ಞಗಳನ್ನು ಯೆಹೋವನಿಗೆ ಸಮ
ರ್ಪಿಸಿದರು. 2ದಾವೀದನು ಯಜ್ಞಗಳನ್ನು ಸಮರ್ಪಿಸಿದ
ಬಳಿಕ ಯೆಹೋವನ ಹೆಸರಿನಲ್ಲಿ ಇಸ್ರೇಲರನ್ನು ಆಶೀ
ರ್ವದಿಸಿದನು. 3ಅನಂತರ ಅಲ್ಲಿ ನೆರೆದಿದ್ದ ಪ್ರತಿಯೊಬ್ಬ
ಇಸ್ರೇಲಿನ ಗಂಡಸಿಗೆ ಮತ್ತು ಹೆಂಗಸಿಗೆ ಒಂದು ರೊಟ್ಟಿ
ಯನ್ನೂ ಸ್ವಲ್ಪ ಖರ್ಜೂರವನ್ನೂ ಒಣದ್ರಾಕ್ಷಿಯನ್ನೂ
ಕೊಟ್ಟನು.
4ದಾವೀದನು ಕೆಲವು ಮಂದಿ ಯಾಜಕರನ್ನು
ಒಡಂಬಡಿಕೆಯ ಪೆಟ್ಟಿಗೆಯ ಸೇವೆಮಾಡುವುದಕ್ಕಾಗಿ
ನೇಮಿಸಿದನು. ಇಸ್ರೇಲರ ದೇವರಾದ ಯೆಹೋವನಿಗೆ
ಸ್ತೋತ್ರ ಸಲ್ಲಿಸುವುದು ಮತ್ತು ಆತನನ್ನು ಕೊಂಡಾಡು
ವುದೇ ಇವರ ಕೆಲಸವಾಗಿತ್ತು. 5ಮೊದಲನೇ ಗುಂಪಿನ
ಗಾಯಕರಿಗೆ ಆಸಾಫನು ಮುಖಂಡನಾಗಿದ್ದನು. ಆಸಾಫನ
ಗುಂಪಿನವರು ತಾಳ ಬಾರಿಸಿದರು. ಜೆಕರ್ಯನು ಎರಡನೇ
ಗುಂಪಿನ ನಾಯಕನು. ಬೇರೆ ಲೇವಿಯರು ಯಾರೆಂದರೆ;
ಉಜ್ಜೀಯೇಲ್, ಶೆಮೀರಾಮೋತ್, ಯೆಹೀಯೇಲ್,
ಮತ್ತಿತ್ಯ, ಎಲೀಯಾಬ್, ಬೆನಾಯ, ಓಬೇದೆದೋಮ್
ಮತ್ತು ಯೆಗೀಯೇಲ್. ಇವರು ಲೈರ್ ಮತ್ತು ಹಾರ್ಪ್
ವಾದ್ಯಗಳನ್ನು ಬಾರಿಸಿದರು. 6ಬೆನಾಯನೂ ಯೆಹಜೀ
ಯೇಲನೂ ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯ
ಬಳಿಯಲ್ಲಿ ತುತ್ತೂರಿಗಳನ್ನು ಯಾವಾಗಲೂ ಊದುವ
ಯಾಜಕರಾಗಿದ್ದರು. 7ಈ ವ್ಯವಸ್ಥೆಯನ್ನು ದಾವೀದನು
ಪ್ರಥಮ ಬಾರಿಗೆ ಆಸಾಫನಿಗೂ ಅವನ ಸೋದರರಿಗೂ
ಯೆಹೋವನ ಸ್ತೋತ್ರವನ್ನು ಹಾಡುವ ಕೆಲಸಕ್ಕಾಗಿ
ನೇಮಿಸಿದನು.

### ದಾವೀದನ ಕೃತಜ್ಞತಾಸ್ತುತಿ

8 ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡಿರಿ; ಆತನ
ನಾಮದ ಮಹತ್ವವನ್ನು ವರ್ಣಿಸಿರಿ. ಆತನ ಮಹತ್ಕಾ
ರ್ಯಗಳನ್ನು ಜನಾಂಗಗಳಲ್ಲಿ ಪ್ರಸಿದ್ಧಪಡಿಸಿರಿ.
9 ಯೆಹೋವನಿಗೆ ಗಾನ ಮಾಡಿರಿ, ಆತನಿಗೆ ಸ್ತುತಿ
ಗೀತೆ ಹಾಡಿರಿ. ಆತನ ಅದ್ಭುತಕಾರ್ಯಗಳನ್ನು
ಧ್ಯಾನಿಸಿರಿ.
10 ಯೆಹೋವನ ಪರಿಶುದ್ಧನಾಮದಲ್ಲಿ ಹಿಗ್ಗಿರಿ; ಆತನ
ದರ್ಶನಕ್ಕಾಗಿ ಬರುವವರೇ, ಸಂತೋಷಪಡಿರಿ.
11 ಯೆಹೋವನನ್ನೂ ಆತನ ಬಲವನ್ನೂ ಆಶ್ರಯಿ
ಸಿರಿ; ಯಾವಾಗಲೂ ಆತನ ದರ್ಶನವನ್ನು
ಅಪೇಕ್ಷಿಸಿರಿ.
12 ಆತನ ಸೇವಕನಾದ ಇಸ್ರೇಲನ ಸಂತತಿಯವರೇ,
ಆತನು ಆರಿಸಿಕೊಂಡ ಯಾಕೋಬನ ಸಂತತಿ
ಯವರೇ,
13 ಆತನ ಅದ್ಭುತಕಾರ್ಯಗಳನ್ನೂ ಮಹತ್ಕಾರ್ಯ
ಗಳನ್ನೂ ನ್ಯಾಯನಿರ್ಣಯಗಳನ್ನೂ ಜ್ಞಾಪಿಸಿ
ಕೊಳ್ಳಿರಿ.
14 ಯೆಹೋವನೇ ನಮ್ಮ ದೇವರು. ಆತನ ನ್ಯಾಯ
ವಿಧಿಗಳು ಭೂಲೋಕದಲ್ಲೆಲ್ಲಾ ಇವೆ.
15 ಯೆಹೋವನ ಒಡಂಬಡಿಕೆಯನ್ನು ಸದಾಕಾಲ
ನೆನಪಿನಲ್ಲಿಡಿರಿ. ಆತನು ಆ ಆಜ್ಞೆಗಳನ್ನು ಸಾವಿರ
ತಲೆ ಮಾರುಗಳಿಗೆ ಕೊಟ್ಟನು.
16 ಯೆಹೋವನು ಅಬ್ರಹಾಮನೊಂದಿಗೆ ಮಾಡಿ
ಕೊಂಡ ಒಡಂಬಡಿಕೆಯನ್ನು ಸ್ಮರಿಸಿರಿ. ಆತನು
ಇಸಾಕನಿಗೆ ಮಾಡಿದ ವಾಗ್ದಾನವನ್ನು ಜ್ಞಾಪಕಕ್ಕೆ
ತನ್ನಿರಿ.
17 ಯೆಹೋವನು ಯಾಕೋಬನಿಗೆ ಕಟ್ಟಳೆಗಳನ್ನು
ಅನುಗ್ರಹಿಸಿದನು. ಅದು ಇಸ್ರೇಲರೊಂದಿಗಿನ
ನಿರಂತರವಾದ ಒಡಂಬಡಿಕೆ.
18 ಯೆಹೋವನು ಇಸ್ರೇಲರಿಗೆ, ‘‘ನಾನು ನಿಮಗೆ
ಕಾನಾನ್ ದೇಶವನ್ನು ಕೊಡುವೆನು. ಆ ವಾಗ್ದತ್ತ
ದೇಶವು ನಿಮ್ಮದಾಗುವುದು’’ ಎಂದು ಹೇಳಿದನು.
19 ಆತನು ‘‘ನಿಮಗೆ ಈ ದೇಶವನ್ನು ಕೊಡುವೆನು;
ಅದು ನಿಮ್ಮ ಸಂತತಿಯವರಿಗೆ ಸ್ವಾಸ್ತ್ಯವಾಗಿರು
ವುದು’’ ಎಂದು ಹೇಳಿದನು.
20 ಅವರು ಒಂದು ದೇಶದಿಂದ ಇನ್ನೊಂದಕ್ಕೂ
ಒಂದು ರಾಜ್ಯದಿಂದ ಇನ್ನೊಂದಕ್ಕೂ ಹೋದರು.
21 ಆದರೆ ಅವರಿಗೆ ಕೇಡುಮಾಡಲು ಯೆಹೋವನು
ಯಾರಿಗೂ ಅವಕಾಶಕೊಡಲಿಲ್ಲ. ಅವರನ್ನು
ಬಾಧಿಸದಂತೆ ಆತನು ಅರಸರುಗಳಿಗೆ ಎಚ್ಚರಿಕೆ
ಕೊಟ್ಟನು.

22 ಯೆಹೋವನು ಆ ರಾಜರಿಗೆ, ''ನಾನು ಆರಿಸಿಕೊಂಡ ಜನಾಂಗಕ್ಕೆ ಉಪದ್ರವ ಕೊಡಬೇಡಿ; ನನ್ನ ಪ್ರವಾದಿಗಳಿಗೆ ಕೇಡುಮಾಡಬೇಡಿ'' ಎಂದು ಹೇಳಿದನು.
23 ಭೂನಿವಾಸಿಗಳೇ, ಯೆಹೋವನಿಗೆ ಕೀರ್ತನೆಯನ್ನು ಹಾಡಿರಿ; ಆತನ ರಕ್ಷಣೆಯನ್ನು ಪ್ರತಿನಿತ್ಯವೂ ಸಾರಿ ಹೇಳಿರಿ.
24 ಯೆಹೋವನ ಮಹಿಮೆಯನ್ನು ಜನಾಂಗಗಳಲ್ಲಿ ಪ್ರಕಟಿಸಿರಿ. ಸರ್ವಜನರಲ್ಲಿ ಆತನ ಅದ್ಭುತ ಕೃತ್ಯಗಳನ್ನು ಪ್ರಸಿದ್ಧಪಡಿಸಿರಿ.
25 ಯೆಹೋವನು ದೊಡ್ಡವನೂ ಸ್ತುತಿಗೆ ಪಾತ್ರನೂ ಆಗಿದ್ದಾನೆ. ಎಲ್ಲಾ ದೇವರುಗಳಲ್ಲಿ ಯೆಹೋವನೇ ಭಯಂಕರನು.
26 ಯಾಕಂದರೆ ಭೂಲೋಕದಲ್ಲಿರುವ ಬೇರೆ ದೇವರು ಗಳೆಲ್ಲಾ ಜಡಮೂರ್ತಿಗಳೇ. ಯೆಹೋವನಾದರೋ ಆಕಾಶಮಂಡಲವನ್ನು ಸೃಷ್ಟಿಸಿದಾತನು.
27 ಆತನ ಸಾನ್ನಿಧ್ಯದಲ್ಲಿ ಮಾನಮಹಿಮೆಗಳೂ ಆತನ ಪವಿತ್ರಾಲಯದಲ್ಲಿ ಬಲವೂ ಸಂತೋಷವೂ ಇವೆ.
28 ಭೂಜನಾಂಗಗಳೇ, ಬಲ ಪ್ರಭಾವಗಳು ಯೆಹೋವನವೇ ಯೆಹೋವನವೇ ಎಂದು ಹೇಳಿ ಆತನನ್ನು ಘನಪಡಿಸಿರಿ.
29 ಯೆಹೋವನ ಮಹಿಮೆಯನ್ನು ಕೊಂಡಾಡಿರಿ; ಆತನ ಹೆಸರಿಗೆ ಘನತೆಯನ್ನು ಸಲ್ಲಿಸಿರಿ. ನಿಮ್ಮ ಕಾಣಿಕೆಗಳನ್ನು ಆತನ ಬಳಿಗೆ ತನ್ನಿರಿ; ಆತನ ಪರಿಶುದ್ಧ ನಾಮವನ್ನು ಆರಾಧಿಸಿರಿ.
30 ಯೆಹೋವನ ಮುಂದೆ ಭೂಲೋಕವೆಲ್ಲಾ ಭಯದಿಂದ ನಡುಗುವುದು! ಆದರೆ ಆತನು ಅದನ್ನು ಬಲವಾದ ಅಸ್ತಿವಾರಗಳಲ್ಲಿ ನಿರ್ಮಿಸಿದ್ದರಿಂದ ಅದು ಕದಲದು.
31 ಭೂಮ್ಯಾಕಾಶಗಳು ಹರ್ಷಿಸಲಿ; ''ಯೆಹೋವನು ರಾಜ್ಯಾಧಿಕಾರವನ್ನು ವಹಿಸಿದ್ದಾನೆ'' ಎಂದು ಜನಾಂಗಗಳಲ್ಲಿ ಪ್ರಸಿದ್ಧಪಡಿಸಿರಿ.
32 ಸಮುದ್ರವೂ ಅದರೊಳಗಿರುವದೆಲ್ಲವೂ ಆರ್ಭಟಿಸಲಿ, ಹೊಲಗದ್ದೆಗಳು ತಮ್ಮ ಹರ್ಷವನ್ನು ವ್ಯಕ್ತಪಡಿಸಲಿ.
33 ಯೆಹೋವನ ಸನ್ನಿಧಿಯಲ್ಲಿ ಅಡವಿಯ ಮರಗಳು ಸಂತೋಷದಿಂದ ಗಾನಮಾಡಲಿ. ಯಾಕೆಂದರೆ ಆತನು ಬರುತ್ತಿದ್ದಾನೆ. ಲೋಕಕ್ಕೆ ನ್ಯಾಯ ತೀರಿಸಲು ಬರುತ್ತಿ ದ್ದಾನೆ.
34 ಯೆಹೋವನಿಗೆ ಕೃತಜ್ಞತಾಸ್ತುತಿಮಾಡಿರಿ. ಆತನು ಒಳ್ಳೆಯವನು. ಆತನ ಪ್ರೀತಿಯು ಸದಾಕಾಲಕ್ಕೂ ಇರುವದು.
35 ''ರಕ್ಷಕನಾದ ಯೆಹೋವನೇ, ನಮ್ಮನ್ನು ರಕ್ಷಿಸು; ನಮ್ಮನ್ನು ಒಂದುಗೂಡಿಸು; ಅನ್ಯಜನಾಂಗಗಳಿಂದ ನಮ್ಮನ್ನು ರಕ್ಷಿಸು. ಆಗ ನಾವು ನಿನ್ನ ಪರಿಶುದ್ಧ ನಾಮವನ್ನು ಕೀರ್ತಿಸುವೆವು. ನಮ್ಮ ಹಾಡುಗಳಿಂದ ನಿನ್ನನ್ನು ಘನಪಡಿಸುವೆವು'' ಎಂದು ಆತನಿಗೆ ಹೇಳಿರಿ.
36 ಇಸ್ರೇಲರ ದೇವರಾದ ಯೆಹೋವನು ಸದಾಕಾಲವೂ ಘನಹೊಂದಲಿ; ನಿರಂತರವೂ ಕೊಂಡಾಡಲ್ಪಡಲಿ!

ಇಸ್ರೇಲರೆಲ್ಲರೂ ಯೆಹೋವನನ್ನು ಸ್ತುತಿಸಿ ''ಆಮೆನ್'' ಅಂದರು.

37 ಆಗ ದಾವೀದನು ಆಸಾಫನನ್ನೂ ಅವನ ಸಹೋದ
ರರನ್ನೂ ಒಡಂಬಡಿಕೆಯ ಪೆಟ್ಟಿಗೆಯ ಮುಂದೆ ಪ್ರತಿನಿತ್ಯ
ಸೇವೆಮಾಡಲು ಅಲ್ಲಿರಿಸಿದನು. 38 ಅವರೊಂದಿಗೆ ಸೇವೆ
ಮಾಡಲು ಓಬೇದೆದೋಮನನ್ನೂ ಇತರ ಅರವತ್ತೆಂಟು
ಮಂದಿ ಲೇವಿಯರನ್ನೂ ಅಲ್ಲಿರಿಸಿದನು. ಓಬೇದೆ
ದೋಮ್ ಮತ್ತು ಹೋಸ ಕಾವಲುಗಾರರಾಗಿದ್ದರು.
ಓಬೇದೆದೋಮನು ಯೆದುತೂನನ ಮಗನಾಗಿದ್ದನು.

39 ಗಿಬ್ಯೋನಿನ ಉನ್ನತಸ್ಥಳದಲ್ಲಿದ್ದ ದೇವದರ್ಶನ
ಗುಡಾರದಲ್ಲಿ ಸೇವೆಮಾಡಲು ದಾವೀದನು ಚಾದೋಕ
ನನ್ನು ಮತ್ತು ಇತರ ಯಾಜಕರನ್ನು ನೇಮಿಸಿದನು. 40 ಪ್ರತಿ
ಮುಂಜಾನೆ ಮತ್ತು ಸಂಧ್ಯಾಕಾಲಗಳಲ್ಲಿ ಚಾದೋಕನು
ಮತ್ತು ಇತರ ಯಾಜಕರು ಸರ್ವಾಂಗಹೋಮವನ್ನು
ಯಜ್ಞವೇದಿಕೆಯ ಮೇಲೆ ಸಮರ್ಪಿಸುತ್ತಿದ್ದರು. ಇಸ್ರೇ
ಲರಿಗೆ ಕೊಡಲ್ಪಟ್ಟಿದ್ದ ಕಟ್ಟಳೆಗಳಿಗನುಸಾರವಾಗಿ ಅವರು
ಮಾಡಿದರು.

41-42 ಹೇಮಾನ್ ಮತ್ತು ಯೆದುತೂನ್ ಅವರೊಂದಿ
ಗಿದ್ದು ತುತ್ತೂರಿಯನ್ನೂದುತ್ತಾ ತಾಳ ಬಾರಿಸುತ್ತಾ, ಇತರ
ವಾದ್ಯಗಳನ್ನು ನುಡಿಸುತ್ತಾ ಯೆಹೋವನಿಗೆ ಸ್ತುತಿಗೀತೆ
ಗಳನ್ನು ಹಾಡಿದರು. ಯೆದುತೂನನ ಮಕ್ಕಳು ದ್ವಾರ
ಪಾಲಕರಾಗಿದ್ದರು. 43 ಆ ಕಾರ್ಯವು ಮುಗಿದ ಬಳಿಕ
ಎಲ್ಲಾ ಇಸ್ರೇಲರು ತಮ್ಮತಮ್ಮ ಮನೆಗಳಿಗೆ ಹಿಂತಿರು
ಗಿದರು. ದಾವೀದನು ತನ್ನ ಕುಟುಂಬವನ್ನು
ಆಶೀರ್ವದಿಸಲು ತನ್ನ ಮನೆಗೆ ಹೋದನು.

### ದಾವೀದನಿಗೆ ದೇವರ ವಾಗ್ದಾನ

17 ದಾವೀದನು ತನ್ನ ಮನೆಗೆ ಹಿಂತಿರುಗಿದ ಬಳಿಕ
ಪ್ರವಾದಿಯಾದ ನಾತಾನನಿಗೆ, ''ನಾನು ದೇವ
ದಾರುಮರಗಳಿಂದ ಮಾಡಿದ ಮನೆಯಲ್ಲಿ ವಾಸಮಾಡು
ತ್ತಿರುವಾಗ ದೇವರ ಒಡಂಬಡಿಕೆಯ ಪೆಟ್ಟಿಗೆಯು ಗುಡಾರ
ದೊಳಗೆ ಇಡಲ್ಪಟ್ಟಿದೆ. ದೇವರಿಗಾಗಿ ಒಂದು ಆಲಯವನ್ನು
ಕಟ್ಟಬೇಕೆಂದಿರುವೆ'' ಎಂದನು.

[2]ಅದಕ್ಕೆ ನಾತಾನನು, ‘‘ನಿನ್ನ ಮನಸ್ಸಿಗೆ ಬಂದಂತೆ
ಮಾಡು. ದೇವರು ನಿನ್ನೊಂದಿಗಿದ್ದಾನೆ’’ ಎಂದನು.
[3]ಆದರೆ ಆ ರಾತ್ರಿ ದೇವರ ಮಾತು ನಾತಾನನಿಗೆ ಬಂತು.
[4]ದೇವರು ಅವನಿಗೆ, ‘‘ನನ್ನ ಸೇವಕನಾದ ದಾವೀದನಿಗೆ
ಹೀಗೆ ಹೇಳು: ‘ನನಗೋಸ್ಕರ ಆಲಯವನ್ನು ಕಟ್ಟುವವನು
ನೀನಲ್ಲ. [5-6]ಇಸ್ರೇಲರನ್ನು ಈಜಿಪ್ಟಿನಿಂದ ಬಿಡಿಸಿದಂದಿ
ನಿಂದ ಈ ದಿವಸದ ತನಕ ನಾನು ಮನೆಯಲ್ಲಿ ವಾಸವಾಗಿ
ರಲಿಲ್ಲ. ನಾನು ಗುಡಾರದಲ್ಲಿಯೇ ಇದ್ದುಕೊಂಡು
ಸಂಚರಿಸುತ್ತಿದ್ದೆನು. ಇಸ್ರೇಲರ ನಾಯಕರಾಗುವದಕ್ಕೆ
ನಾನು ಕೆಲವರನ್ನು ಆರಿಸಿಕೊಂಡಿದ್ದೇನೆ. ಆ ನಾಯಕರು
ನನ್ನ ಜನರಿಗೆ ಕುರುಬರಂತಿದ್ದಾರೆ. ಅವರೊಂದಿಗೆ ನಾನು
ಬೇರೆಬೇರೆ ಸ್ಥಳಗಳಿಗೆ ಸಂಚರಿಸುತ್ತಿದ್ದಾಗ ನಾನೆಂದೂ
ನನಗೊಂದು ಆಲಯವನ್ನು ದೇವದಾರುಮರದಿಂದ
ಕಟ್ಟಲು ಕೇಳಿಕೊಂಡಿರಲಿಲ್ಲ.’
[7]‘‘ನನ್ನ ಸೇವಕನಾದ ದಾವೀದನಿಗೆ ಹೇಳು: ಸರ್ವಶಕ್ತ
ನಾದ ದೇವರು ಹೀಗನ್ನುತ್ತಾನೆ: ‘ಕುರಿಗಳನ್ನು ಮೇಯಿ
ಸುತ್ತಿದ್ದ ನಿನ್ನನ್ನು ನಾನು ಆರಿಸಿಕೊಂಡೆನು; ನನ್ನ ಜನರಾದ
ಇಸ್ರೇಲರ ಮೇಲೆ ನಿನ್ನನ್ನು ಅರಸನನ್ನಾಗಿ ಮಾಡಿದೆನು.
[8]ನೀನು ಹೋದಲ್ಲೆಲ್ಲಾ ನಿನ್ನೊಂದಿಗೆ ನಾನಿದ್ದೆನು; ನಿನ್ನ
ಮುಂದೆ ಹೋಗಿ ನಿನ್ನ ವೈರಿಗಳನ್ನು ಸಾಯಿಸಿದೆನು. ಈಗ
ನಾನು ನಿನ್ನನ್ನು ಲೋಕದಲ್ಲಿ ಎಲ್ಲರಿಗಿಂತಲೂ ಪ್ರಸಿದ್ಧಿ
ಹೊಂದುವಂತೆ ಮಾಡುವೆನು. [9]ನಾನು ಈ ದೇಶವನ್ನು
ನನ್ನ ಜನರಾದ ಇಸ್ರೇಲರಿಗೆ ಕೊಡುವೆನು; ಅವರು ಮರ
ಗಳನ್ನು ನೆಟ್ಟು ಅದರ ನೆರಳಡಿಯಲ್ಲಿ ಸಮಾಧಾನದಿಂದ
ವಾಸಿಸುವರು; ಅವರನ್ನು ಯಾರೂ ಬಾಧಿಸರು. ದುಷ್ಟರು
ಮುಂಚಿನಂತೆ ಅವರಿಗೆ ಕೇಡುಮಾಡರು. [10]ಅವರನ್ನು
ಸಂರಕ್ಷಿಸಲು ನಾನು ನಾಯಕರನ್ನು ಎಬ್ಬಿಸುವೆನು; ನಾನು
ನಿನ್ನ ವೈರಿಗಳನ್ನೆಲ್ಲಾ ಸೋಲಿಸಿಬಿಡುವೆನು.
‘‘‘ನಿನ್ನ ಮನೆತನವನ್ನು ನಾನು ಕಟ್ಟುವೆನು. [11]ನೀನು
ಸತ್ತು ನಿನ್ನ ಪೂರ್ವಿಕರ ಬಳಿ ಸೇರಿದಾಗ ನಾನು ನಿನ್ನ
ಮಕ್ಕಳಲ್ಲಿ ಒಬ್ಬನನ್ನು ಅರಸನನ್ನಾಗಿ ಮಾಡುವೆನು. ನಾನು
ಅವನ ರಾಜ್ಯವನ್ನು ಸ್ಥಿರಪಡಿಸುವೆನು. [12]ನಿನ್ನ ಮಗನು
ನನಗೆ ಆಲಯವನ್ನು ಕಟ್ಟುವನು. ನಿನ್ನ ಮಗನ ವಂಶವು
ಸದಾಕಾಲಕ್ಕೂ ಇಸ್ರೇಲ್ ಜನಾಂಗವನ್ನು ಆಳುವದು.
[13]ನಾನು ಅವನಿಗೆ ತಂದೆಯಾಗಿರುವೆನು; ಅವನು ನನಗೆ
ಮಗನಾಗಿರುವನು. ನಿನಗಿಂತ ಮುಂಚೆ ಸೌಲನು ರಾಜ
ನಾಗಿದ್ದನು. ಆದರೆ ನಾನು ಅವನನ್ನು ತೆಗೆದುಹಾಕಿದೆನು.
ಆದರೆ ನನ್ನ ಕೃಪೆ ನಿನ್ನ ಮಗನಿಂದ ತೊಲಗಿ ಹೋಗು
ವದಿಲ್ಲ. [14]ನನ್ನ ಮನೆಗೂ ನನ್ನ ರಾಜ್ಯಕ್ಕೂ ಅವನನ್ನು
ನಿತ್ಯದ ರಾಜನನ್ನಾಗಿ ಮಾಡುವೆನು; ಅವನ ಆಳ್ವಿಕೆಯು
ನಿರಂತರವಾಗಿರುವುದು.’’’ [15]ನಾತಾನನು ದಾವೀದನಿಗೆ
ತನಗೆ ದೊರೆತ ದರ್ಶನವನ್ನು ಮತ್ತು ದೇವರು ತನಗೆ
ತಿಳಿಸಿದ ಎಲ್ಲಾ ಮಾತುಗಳನ್ನು ತಿಳಿಸಿದನು.

### ದಾವೀದನ ಪ್ರಾರ್ಥನೆ

[16]ಆಗ ದಾವೀದನು ಪವಿತ್ರಗುಡಾರಕ್ಕೆ ಹೋಗಿ ದೇವರ
ಸನ್ನಿಧಿಯಲ್ಲಿ ಕುಳಿತುಕೊಂಡು, ‘‘ದೇವರಾದ ಯೆಹೋ
ವನೇ, ನೀನು ನನ್ನನ್ನೂ ನನ್ನ ಕುಟುಂಬವನ್ನೂ ಎಷ್ಟೋ
ಆಶೀರ್ವದಿಸಿರುವೆ. ನೀನು ಯಾಕೆ ಹೀಗೆ ಮಾಡಿದಿಯೊ
ನನಗೆ ತಿಳಿಯುತ್ತಿಲ್ಲ. [17]ನನ್ನ ವಂಶದವರ ವಿಷಯ
ದಲ್ಲಿಯೂ ನೀನು ವಾಗ್ದಾನ ಮಾಡಿರುವೆ. ನೀನು ನನ್ನನ್ನು
ಒಬ್ಬ ಮಹಾವ್ಯಕ್ತಿಯಂತೆಯೊ ಎಂಬಂತೆ ಪರಿಗಣಿಸಿರುವೆ.
[18]ನೀನು ನನಗೆಷ್ಟೋ ಸಹಾಯ ಮಾಡಿರುವೆ. ನಾನು
ಕೇವಲ ನಿನ್ನ ಸೇವಕನಷ್ಟೇ. [19]ಯೆಹೋವನೇ, ನಿನ್ನ
ಚಿತ್ತಕ್ಕನುಸಾರವಾಗಿ ಇಂಥ ಮಹತ್ಕಾರ್ಯವನ್ನು ನೀನು
ನನಗೋಸ್ಕರ ಮಾಡಿರುವೆ. [20]ಯೆಹೋವನೇ, ನಿನಗೆ
ಸಮಾನರು ಬೇರೆ ಯಾರೂ ಇಲ್ಲ. ನಿನ್ನ ಹೊರತು ಬೇರೆ
ದೇವರಿಲ್ಲ. ಇಂಥ ಮಹತ್ಕಾರ್ಯ ಮಾಡುವ ದೇವರ ಬಗ್ಗೆ
ನಾವು ಕೇಳಿಯೇ ಇಲ್ಲ. [21]ಇಸ್ರೇಲಿಗೆ ಸಮಾನವಾದ
ಜನಾಂಗ ಭೂಲೋಕದಲ್ಲಿ ಎಲ್ಲಿದೆ? ನೀನು ಇಂಥ
ಅದ್ಭುತಕಾರ್ಯಗಳನ್ನು ಮಾಡಿರುವುದು ಇಸ್ರೇಲ್
ಜನಾಂಗಕ್ಕಾಗಿಯೇ. ನೀನು ನಮ್ಮನ್ನು ಈಜಿಪ್ಟಿನಿಂದ
ಹೊರತಂದು ಸ್ವತಂತ್ರರನ್ನಾಗಿ ಮಾಡಿದೆ. ಹೀಗೆ ನೀನು
ನಿನ್ನ ಹೆಸರನ್ನು ಪ್ರಖ್ಯಾತಿಮಾಡಿದೆ. ನೀನು ನಿನ್ನ ಜನರ
ಮುಂದೆ ಹೋಗುತ್ತಾ, ಅನ್ಯಜನರು ತಮ್ಮ ದೇಶವನ್ನು
ಬಿಟ್ಟುಹೋಗುವಂತೆ ಮಾಡಿದೆ. [22]ಇಸ್ರೇಲರನ್ನು ಸದಾ
ಕಾಲಕ್ಕೂ ನಿನ್ನ ಜನರನ್ನಾಗಿ ಮಾಡಿಕೊಂಡೆ.
ಯೆಹೋವನೇ, ನೀನೇ ಅವರಿಗೆ ದೇವರಾದೆ!
[23]‘‘ಯೆಹೋವನೇ, ಈಗ ನೀನು ನನಗೂ ನನ್ನ
ಸಂತತಿಗೂ ಈ ವಾಗ್ದಾನವನ್ನು ಮಾಡಿರುವೆ. ಆ ವಾಗ್ದಾನ
ವನ್ನು ಶಾಶ್ವತಗೊಳಿಸು; ಅದು ಸದಾಕಾಲಕ್ಕೂ
ಸ್ಥಿರವಾಗಿರಲಿ. [24]ನಿನ್ನ ವಾಗ್ದಾನವನ್ನು ನೆರವೇರಿಸು. ಆಗ
ಜನರು, ‘ಸರ್ವಶಕ್ತನಾದ ಯೆಹೋವನು ಇಸ್ರೇಲರ
ದೇವರೂ ರಕ್ಷಕನೂ ಆಗಿದ್ದಾನೆ’ ಎಂದು ಹೇಳುವರು.
ನಾನು ನಿನ್ನ ಸೇವಕನಾಗಿದ್ದೇನೆ. ನನ್ನ ಕುಟುಂಬವು
ಬಲಿಷ್ಠವಾಗಿದ್ದು ನಿನ್ನ ಸೇವೆಯನ್ನು ಮುಂದುವರಿಸುವಂತೆ
ಕೃಪೆಯನ್ನು ಅನುಗ್ರಹಿಸು.
[25]‘‘ನನ್ನ ದೇವರೇ, ನಿನ್ನ ಸೇವಕನಾದ ನನ್ನೊಂದಿಗೆ
ನೀನು ಮಾತನಾಡಿದೆ. ನೀನು ನನ್ನ ಕುಟುಂಬವನ್ನು ಸ್ಥಿರ
ವಾಗಿ ಕಟ್ಟುವೆನೆಂದು ವಾಗ್ದಾನ ಮಾಡಿದೆ. ಆದುದರಿಂದ
ನಾನು ಧೈರ್ಯದಿಂದ ನಿನ್ನ ಸಂಗಡ ಮಾತನಾಡುತ್ತಿದ್ದೇನೆ;
ನಿನ್ನ ವಾಗ್ದಾನವನ್ನು ನೆರವೇರಿಸು ಎಂದು ಕೇಳಿ
ಕೊಳ್ಳುತ್ತಿದ್ದೇನೆ. [26]ಯೆಹೋವನೇ, ನೀನೇ ದೇವರು.
ಸ್ವತಃ ನೀನಾಗಿಯೇ ನನಗೆ ಇಂಥಾ ಒಳ್ಳೆಯ ವಾಗ್ದಾನ
ಗಳನ್ನು ಮಾಡಿರುವೆ. [27]ನನ್ನ ಸಂತತಿಯವರನ್ನು ಆಶೀ
ರ್ವದಿಸಿ ನಿನ್ನ ಕರುಣೆಯನ್ನು ತೋರಿಸಿದೆ. ನನ್ನ
ಸಂತತಿಯವರು ಸದಾಕಾಲ ನಿನ್ನ ಸೇವೆಮಾಡುತ್ತಾರೆಂದು

ನೀನು ವಾಗ್ದಾನ ಮಾಡಿರುವೆ. ಯೆಹೋವನೇ, ನೀನಾ
ಗಿಯೇ ನನ್ನ ಸಂತತಿಯವರನ್ನು ಆಶೀರ್ವದಿಸಿದ್ದರಿಂದ
ನನ್ನ ಸಂತತಿಯವರು ಸದಾಕಾಲಕ್ಕೂ ಆಶೀರ್ವಾದ
ಹೊಂದಿಕೊಳ್ಳುವರು!'' ಎಂದು ಪ್ರಾರ್ಥಿಸಿದನು.

### ಅನ್ಯಜನಾಂಗಗಳ ಮೇಲೆ ದಾವೀದನ ಜಯ

18 ಅನಂತರ ದಾವೀದನು ಫಿಲಿಷ್ಟಿಯರ ಮೇಲೆ
ಯುದ್ಧಕ್ಕೆ ಹೋದನು. ಅವರನ್ನು ಸೋಲಿಸಿ ಗತ್
ಪಟ್ಟಣ ಮತ್ತು ಅದರ ಸುತ್ತುಮುತ್ತಲಿದ್ದ ಊರುಗಳನ್ನು
ವಶಪಡಿಸಿಕೊಂಡನು.

2ಅನಂತರ ದಾವೀದನು ಮೋವಾಬ್ಯರ ಸಂಗಡ
ಯುದ್ಧಮಾಡಿ ಸೋಲಿಸಿದನು. ಅವರು ದಾವೀದನ
ಸೇವಕರಾಗಿ ಕಪ್ಪಕೊಡಬೇಕಾಯಿತು.

3ದಾವೀದನು ಚೋಬದ ಅರಸನಾದ ಹದದೆಜರನ
ಸೈನ್ಯದೊಡನೆ ಕಾದಾಡಿ ಅವರನ್ನು ಹಮಾತಿನ ತನಕ
ಹಿಂದಟ್ಟಿದನು. ಹದದೆಜರನು ತನ್ನ ರಾಜ್ಯವನ್ನು
ಯೂಫ್ರೇಟೀಸ್ ನದಿಯ ತನಕ ವಿಸ್ತರಿಸಲು
ಪ್ರಯತ್ನಿಸುತ್ತಿದ್ದನು.

4ಹದದೆಜರನಿಂದ ದಾವೀದನು ಒಂದು ಸಾವಿರ
ರಥಗಳನ್ನೂ ಏಳು ಸಾವಿರ ಮಂದಿ ರಾಹುತರನ್ನೂ
ಇಪ್ಪತ್ತು ಸಾವಿರ ಮಂದಿ ಕಾಲಾಳುಗಳನ್ನೂ ಸೆರೆಹಿಡಿದು
ಹದದೆಜರನ ಕುದುರೆಗಳ ಹಿಂಗಾಲಿನ ನರಗಳನ್ನು
ಕೊಯ್ದು ಆ ಕುದುರೆಗಳು ರಥಗಳನ್ನು ಎಳೆಯದಂತೆ
ಮಾಡಿದನು. ಆದರೆ ನೂರು ರಥಗಳನ್ನು ಎಳೆಯಲು
ಬೇಕಾಗುವಷ್ಟು ಕುದುರೆಗಳನ್ನು ಉಳಿಸಿದನು.

5ಹದದೆಜರನಿಗೆ ದಮಸ್ಕದಲ್ಲಿರುವ ಅರಾಮ್ಯರು ಸಹಾ
ಯಕ್ಕೆ ಬಂದರು. ಆದರೆ ದಾವೀದನು ಅರಾಮ್ಯರ
ಸೈನ್ಯವನ್ನು ಸೋಲಿಸಿ ಅವರ ಇಪ್ಪತ್ತೆರಡು ಸಾವಿರ ಮಂದಿ
ಸೈನಿಕರನ್ನು ಕೊಂದನು. 6ನಂತರ ಅರಾಮ್ಯರ ದಮಸ್ಕ
ದಲ್ಲಿ ತನ್ನ ಕೋಟೆಯನ್ನು ಸ್ಥಾಪಿಸಿದನು. ಅರಾಮ್ಯರು
ದಾವೀದನ ಸೇವಕರಾಗಿ ಅವನಿಗೆ ಕಪ್ಪವನ್ನು ತಂದೊಪ್ಪಿ
ಸುತ್ತಿದ್ದರು. ಹೀಗೆ ದಾವೀದನು ಹೋದಕಡೆಯಲ್ಲೆಲ್ಲಾ
ಯೆಹೋವನು ಅವನಿಗೆ ಜಯವನ್ನು ಕೊಟ್ಟನು.

7ಹದದೆಜರನ ಸೇನಾಧಿಪತಿಗಳು ಉಪಯೋಗಿಸುತ್ತಿದ್ದ
ಬಂಗಾರದ ಗುರಾಣಿಗಳನ್ನು ತೆಗೆದುಕೊಂಡು ಜೆರುಸ
ಲೇಮಿಗೆ ತಂದನು. 8ಅಲ್ಲದೆ ಟಿಭತ್ ಮತ್ತು ಕೂನ್
ಪಟ್ಟಣಗಳಿಂದ ಬಹಳ ತಾಮ್ರವನ್ನು ತೆಗೆದುಕೊಂಡನು.
ಇವುಗಳಿಂದ ಸೊಲೊಮೋನನು ತಾಮ್ರದ ತೊಟ್ಟಿ
ತಾಮ್ರದ ಕಂಬ ಮತ್ತು ದೇವಾಲಯದ ಬೇರೆ ಸಾಮಾಗ್ರಿ
ಗಳನ್ನು ಮಾಡಿಸಿದನು.

9ದಾವೀದನು ಹದದೆಜರನನ್ನು ಸದೆಬಡಿದನೆಂದು
ತಿಳಿದ ಹಮಾತಿನ ಅರಸನಾದ ತೋವನು 10ತನ್ನ ಮಗ
ನಾದ ಹದೋರಾಮನನ್ನು ದಾವೀದನ ಬಳಿಗೆ
ಸಮಾಧಾನಕ್ಕಾಗಿಯೂ ಆಶೀರ್ವದಿಸುವುದಕ್ಕಾಗಿಯೂ
ಕಳುಹಿಸಿದನು; ಯಾಕಂದರೆ ದಾವೀದನು ಹದದೆಜರನ
ವಿರುದ್ಧ ಹೋರಾಡಿ ಅವನನ್ನು ಸೋಲಿಸಿದ್ದನು. ಹದದೆ
ಜರನು ತೋವುನೊಂದಿಗೆ ಯುದ್ಧಮಾಡಿದ್ದನು. ಹದೋ
ರಾಮನು ಬೆಳ್ಳಿಬಂಗಾರಗಳ ಮತ್ತು ತಾಮ್ರಗಳ ವಸ್ತು
ಗಳನ್ನು ದಾವೀದನಿಗೆ ಕೊಟ್ಟನು. 11ದಾವೀದ ರಾಜನು
ಅವುಗಳನ್ನು ಶುದ್ಧೀಕರಿಸಿ ಯೆಹೋವನಿಗೆ ಪ್ರತಿಷ್ಠಿಸಿದನು.
ಅದೇ ರೀತಿಯಾಗಿ ಎದೋಮ್ಯರಿಂದ, ಮೋವಾಬ್ಯರಿಂದ,
ಫಿಲಿಷ್ಟಿಯರಿಂದ, ಅಮಾಲೇಕ್ಯರಿಂದ ಮತ್ತು ಅಮ್ಮೋನಿ
ಯರಿಂದ ತೆಗೆದುಕೊಂಡಿದ್ದ ಬೆಳ್ಳಿಬಂಗಾರದ ವಸ್ತು
ಗಳನ್ನು ಶುದ್ಧಿಮಾಡಿ ದೇವರಿಗೆ ಪ್ರತಿಷ್ಠಿಸಿದನು.

12ಚೆರೂಯಳ ಮಗನಾದ ಅಬ್ಷೈಯು ಉಪ್ಪಿನ ತಗ್ಗಿನಲ್ಲಿ
ಒಮ್ಮೆ ಹದಿನೆಂಟು ಸಾವಿರ ಮಂದಿ ಎದೋಮ್ಯರನ್ನು
ಕೊಂದುಹಾಕಿದನು. 13ಅಬ್ಷೈಯು ಎದೋಮಿನಲ್ಲಿ
ಕೋಟೆಯನ್ನು ಕಟ್ಟಿ ಎದೋಮ್ಯರೆಲ್ಲರನ್ನು ದಾವೀದನ
ಸೇವಕರನ್ನಾಗಿ ಮಾಡಿದನು. ದಾವೀದನು ಹೋದಕಡೆ
ಗಳಲ್ಲೆಲ್ಲಾ ಯೆಹೋವನು ಅವನಿಗೆ ಜಯವನ್ನು
ಕೊಟ್ಟನು.

### ದಾವೀದನ ಮುಖ್ಯಾಧಿಕಾರಿಗಳು

14ಇಸ್ರೇಲರೆಲ್ಲರಿಗೆ ಅರಸನಾಗಿದ್ದ ದಾವೀದನು
ಪಕ್ಷಪಾತವಿಲ್ಲದೆ ನ್ಯಾಯತೀರಿಸುತ್ತಿದ್ದನು. 15ಚೆರೂಯಳ
ಮಗನಾದ ಯೋವಾಬನು ಅವನ ಪ್ರಧಾನ ಸೇನಾಪತಿ
ಯಾಗಿದ್ದನು. ಅಹೀಲೂದನ ಮಗನಾದ ಯೆಹೋಷಾ
ಫಾಟನು ಲೇಖಕನಾಗಿದ್ದು ದಾವೀದನ ಚರಿತ್ರೆಯನ್ನು
ಬರೆದಿಟ್ಟನು.

16ಅಹೀಟೂಬನ ಮಗನಾದ ಚಾದೋಕನೂ ಎಬ್ಯಾ
ತಾರನ ಮಗನಾದ ಅಬೀಮೆಲೆಕನೂ ಯಾಜಕ
ರಾಗಿದ್ದರು. ಶವ್ಷನು ಲೇಖಕನಾಗಿದ್ದನು.

17ಕೆರೇತ್ಯ ಮತ್ತು ಪೆಲೇತ್ಯ ಎಂಬ ಕಾವಲುದಂಡುಗಳಿಗೆ
ಬೆನಾಯನು ಅಧಿಕಾರಿಯಾಗಿದ್ದನು. ಬೆನಾಯನು
ಯೆಹೋಯಾದನ ಮಗ. ದಾವೀದನ ಗಂಡುಮಕ್ಕಳು
ಮುಖ್ಯ ಸ್ಥಾನಗಳಲ್ಲಿದ್ದು ದಾವೀದನ ಸೇವೆ
ಮಾಡುತ್ತಿದ್ದರು.

### ಅಮ್ಮೋನಿಯರು ದಾವೀದನ ಜನರನ್ನು ಅವಮಾನಪಡಿಸಿದ್ದು

19 ನಾಹಾಷನು ಅಮ್ಮೋನಿಯರ ಅರಸನಾಗಿದ್ದನು.
ಅವನು ಸತ್ತ ಬಳಿಕ ಅವನು ಮಗನು ಪಟ್ಟಕ್ಕೆ
ಬಂದನು. 2ದಾವೀದನು, ''ನಾಹಾಷನು ನನಗೆ ದಯೆ
ತೋರಿಸಿದ್ದನು. ಅವನ ಮಗನಾದ ಹಾನೂನನಿಗೆ ನಾನೂ
ದಯೆತೋರುವೆನು'' ಎಂದು ಹೇಳಿ ಹಾನೂನನನ್ನು
ಸಂತೈಸಲು ಸೇವಕರನ್ನು ಕಳುಹಿಸಿದನು. ದಾವೀದನ

ಸೇವಕರು ಅಮ್ಮೋನ್ ದೇಶಕ್ಕೆ ಹೋಗಿ ದುಃಖದಲ್ಲಿದ್ದ
ಹಾನೂನನನ್ನು ಸಂತೈಸಿದರು.
[3]ಆದರೆ ಅಮ್ಮೋನಿಯರ ನಾಯಕರು ಹಾನೂನನಿಗೆ,
''ಮೋಸ ಹೋಗಬೇಡ, ದಾವೀದನು ನಿನ್ನ ತಂದೆಯನ್ನು
ಗೌರವಿಸಿ ನಿನ್ನನ್ನು ಸಂತೈಸಲು ಸೇವಕರನ್ನು ಕಳುಹಿಸಿದ
ನೆಂದು ಭಾವಿಸಿಕೊಂಡಿರುವೆಯಾ? ಇಲ್ಲ, ಅವನು ನಿನ್ನ
ರಾಜ್ಯದಲ್ಲಿ ಹೊಂಚುಹಾಕಲೂ ವಿಷಯಗಳನ್ನು ಸಂಗ್ರ
ಹಿಸಲೂ ಕಳುಹಿಸಿದ್ದಾನೆ'' ಎಂದು ಹೇಳಿದರು. [4]ಆಗ
ಹಾನೂನನು ದಾವೀದನ ಸೇವಕರನ್ನು ಬಂಧಿಸಿ ಅವರ
ಗಡ್ಡಗಳನ್ನು ಬೋಳಿಸಿ ಅವರ ವಸ್ತ್ರಗಳನ್ನು ಸೊಂಟದಿಂದ
ಕೆಳಭಾಗದವರೆಗೆ ಕತ್ತರಿಸಿಬಿಟ್ಟು ಅವರನ್ನು ಹಿಂದಕ್ಕೆ
ಕಳುಹಿಸಿದನು.
[5]ದಾವೀದನ ಸೇವಕರು ತಮ್ಮ ಮನೆಗೆ ಹಿಂದಿರುಗಲು
ನಾಚಿಕೆಪಟ್ಟರು. ಇದನ್ನು ಅರಿತ ಕೆಲವರು ದಾವೀದನ
ಬಳಿಗೆ ಹೋಗಿ ನಡೆದದ್ದನ್ನು ತಿಳಿಸಿದರು. ಆಗ ದಾವೀ
ದನು, ''ನೀವು ನಿಮ್ಮ ಗಡ್ಡ ಬೆಳೆಯುವ ತನಕ ಜೆರಿಕೋ
ಪಟ್ಟಣದಲ್ಲಿಯೇ ಇರಿ. ಅನಂತರ ನೀವು ಮನೆಗೆ ಬರ
ಬಹುದು'' ಎಂದು ತನ್ನ ಸೇವಕರಿಗೆ ಹೇಳಿಕಳುಹಿಸಿದನು.
[6]ದಾವೀದನು ತಮಗೆ ಶತ್ರುವಾದನೆಂದು ಅಮ್ಮೋನಿ
ಯರಿಗೆ ತಿಳಿದಾಗ ಹಾನೂನನು ಮುವತ್ನಾಲ್ಕು ಸಾವಿರ
ಕಿಲೋ. ಗ್ರಾಂ ತೂಕದ ಬೆಳ್ಳಿಯನ್ನು ಕೊಟ್ಟು ಮೆಸೋ
ಪೊತಾಮಿಯಾದಿಂದ ರಥಗಳನ್ನೂ ರಾಹುತರನ್ನೂ
ಕೊಂಡು ಕೊಂಡನು. ಅಲ್ಲದೆ ಅರಾಮದ ಮಾಕ ಮತ್ತು
ಚೋಬಾ ಪಟ್ಟಣಗಳಿಂದ ರಥಗಳನ್ನು ಮತ್ತು ರಾಹುತ
ರನ್ನು ಕೊಂಡುಕೊಂಡನು. [7]ಹೀಗೆ ಅಮ್ಮೋನಿಯರು
ಮೂವತ್ತೆರಡು ಸಾವಿರ ರಥಗಳಿಂದ ಯುದ್ಧಕ್ಕೆ ಸಜ್ಜಾ
ದರು. ಅಲ್ಲದೆ ಮಾಕಾದ ಅರಸನಿಗೆ ಹಣವನ್ನು ಕೊಟ್ಟು
ಅವನ ಸೈನ್ಯವನ್ನೂ ತಮ್ಮ ಸಹಾಯಕ್ಕೆ ಬರಮಾಡಿದರು.
ಮಾಕದ ಅರಸನೂ ಅವನ ಸೈನಿಕರೂ ಬಂದು ಮೇದೆಬ
ಪಟ್ಟಣದ ಬಳಿ ಪಾಳೆಯ ಮಾಡಿಕೊಂಡರು. ಇತ್ತ
ಅಮ್ಮೋನಿಯರೂ ಯುದ್ಧ ಸನ್ನದ್ಧರಾದರು.
[8]ಇದನ್ನು ಕೇಳಿದ ದಾವೀದನು ಯೋವಾಬನನ್ನೂ ತನ್ನ
ಸಮಸ್ತ ಸೈನ್ಯವನ್ನೂ ಅವರೊಂದಿಗೆ ಯುದ್ಧಮಾಡಲು
ಕಳುಹಿಸಿದನು. [9]ಅಮ್ಮೋನಿಯರು ತಮ್ಮ ಪಟ್ಟಣದಿಂದ
ಹೊರಬಂದರು. ಅವರ ಸಹಾಯಕ್ಕಾಗಿ ಬಂದಿದ್ದ
ಅರಸರು ಪ್ರತ್ಯೇಕವಾಗಿಯೇ ಇದ್ದರು.
[10]ಯೋವಾಬನು ರಣರಂಗವನ್ನು ವೀಕ್ಷಿಸಿದಾಗ
ಎರಡು ಗುಂಪುಪಿನ ಸೈನ್ಯಗಳಿದ್ದದ್ದನ್ನು ಕಂಡನು. ಒಂದು
ಗುಂಪು ಅವನ ಮುಂಭಾಗದಲ್ಲಿಯೂ ಇನ್ನೊಂದು
ಗುಂಪು ಅವನ ಹಿಂಭಾಗದಲ್ಲಿಯೂ ಇದ್ದವು. ಆಗ
ಯೋವಾಬನು ತನ್ನಲ್ಲಿದ್ದ ರಣವೀರರನ್ನು ಆರಿಸಿ
ಅರಾಮ್ಯರ ವಿರುದ್ಧವಾಗಿ ಯುದ್ಧಮಾಡಲು ಕಳುಹಿ
ಸಿದನು. [11]ಉಳಿದ ಸೈನಿಕರನ್ನು ಅಬ್ಷೈಯನ ನಾಯಕತ್ವ
ದಲ್ಲಿ ಇರಿಸಿದನು. ಅಬ್ಷೈಯು ಯೋವಾಬನ ತಮ್ಮನು.
ಈ ಸೈನಿಕರು ಅಮ್ಮೋನಿಯರ ವಿರುದ್ಧವಾಗಿ ಯುದ್ಧಕ್ಕೆ
ಹೊರಟರು. [12]ಯೋವಾಬನು ಅಬ್ಷೈಗೆ, ''ಅರಾಮ್ಯರ
ಸೈನ್ಯವು ನನಗಿಂತ ಬಲಿಷ್ಠವಾಗಿದ್ದರೆ, ನೀನು ನನ್ನ ಸಹಾ
ಯಕ್ಕೆ ಬರಬೇಕು. ಅಮ್ಮೋನಿಯರ ಸೈನ್ಯವು ನಿನಗಿಂತ
ಬಲಿಷ್ಠವಾಗಿದ್ದರೆ ನಾನು ನಿನ್ನ ಸಹಾಯಕ್ಕೆ ಬರುವೆನು.
[13]ನಾವು ಧೈರ್ಯಶಾಲಿಗಳಾಗಿದ್ದು ಅಂಜದೆ ನಮ್ಮ
ಜನರಿಗಾಗಿಯೂ ನಮ್ಮ ದೇವರ ಪಟ್ಟಣಗಳಿಗಾಗಿಯೂ
ಯುದ್ಧಮಾಡೋಣ. ಯೆಹೋವನು ತನ್ನ ಚಿತ್ತದಂತೆ
ನಮ್ಮನ್ನು ನಡೆಸಲಿ'' ಎಂದು ಹೇಳಿದನು.
[14]ಯೋವಾಬನು ತನ್ನ ಸೈನ್ಯದೊಡನೆ ಅರಾಮ್ಯರ
ಸೈನ್ಯದ ಮೇಲೆ ದಾಳಿ ಮಾಡಿದನು. ಅರಾಮ್ಯರ ಸೈನ್ಯವು
ಅವನೆದುರಿನಿಂದ ಓಡಿಹೋಯಿತು. [15]ಅರಾಮ್ಯರ
ಸೈನ್ಯವು ಓಡಿಹೋಗುವುದನ್ನು ನೋಡಿದ ಅಮ್ಮೋನಿ
ಯರು ಸಹ ಇಸ್ರೇಲರ ಎದುರಿನಿಂದ ಹಿಂದುರಿಗಿ
ಓಡಿದರು. ಅಬ್ಷೈ ಮತ್ತು ಅವನ ಸೈನಿಕರಿಂದ ಅವರು
ಪಲಾಯನ ಗೈದು ತಮ್ಮ ಪಟ್ಟಣದೊಳಗೆ ಸೇರಿಕೊಂಡರು.
ಯೋವಾಬನು ಜೆರುಸಲೇಮಿಗೆ ಹೋದನು.
[16]ಅರಾಮ್ಯರು ತಾವು ಇಸ್ರೇಲರಿಂದ ಸೋತುಹೋದ
ದ್ದನ್ನು ನೋಡಿ ಯೂಫ್ರೇಟೀಸ್ ನದಿಯ ಪೂರ್ವದಲ್ಲಿದ್ದ
ಅರಾಮ್ಯರನ್ನು ಸಹಾಯಕ್ಕಾಗಿ ಕರೆಯಿಸಿದರು.
ಶೋಫಕನು ಹದದೆಜರನ ಸೇನಾಧಿಪತಿಯಾಗಿದ್ದನು.
[17]ಅರಾಮ್ಯರು ಯುದ್ಧಕ್ಕೆ ಜನಕೂಡಿಸುತ್ತಾರೆಂಬ
ಸುದ್ದಿಯು ದಾವೀದನಿಗೆ ಮುಟ್ಟಿದಾಗ ಅವನು ಇಸ್ರೇಲ್
ಸೈನ್ಯವನ್ನು ಒಟ್ಟುಗೂಡಿಸಿ ಜೋರ್ಡನ್ ನದಿಯನ್ನು
ದಾಟಿ ಅರಾಮ್ಯರೊಂದಿಗೆ ಯುದ್ಧಮಾಡಿದನು. ಯುದ್ಧ
ಸನ್ನದ್ಧರಾಗಿ ಕಾಳಗವನ್ನು ಆರಂಭಿಸಿಯೇ ಬಿಟ್ಟರು.
[18]ಅರಾಮ್ಯರು ಇಸ್ರೇಲರ ಎದುರು ನಿಲ್ಲಲಾರದೆ
ಬೆನ್ನುಹಾಕಿ ಓಡಿದರು. ಆ ದಿವಸ ದಾವೀದನೂ ಅವನ
ಸೈನಿಕರೂ ಅರಾಮ್ಯರ ಏಳು ಸಾವಿರ ಮಂದಿ ರಾಹು
ತರನ್ನೂ ನಲವತ್ತು ಸಾವಿರ ಮಂದಿ ಕಾಲಾಳುಗಳನ್ನೂ
ಕೊಂದರು. ಇವರಲ್ಲಿ ಅರಾಮ್ಯರ ಸೇನಾಪತಿಯಾದ
ಶೋಫಕನೂ ಕೊಲ್ಲಲ್ಪಟ್ಟನು.
[19]ಹದದೆಜರನು ತಾನು ದಾವೀದನ ಸೈನ್ಯದಿಂದ
ಸೋಲಿಸಲ್ಪಟ್ಟನೆಂದು ಗೊತ್ತಾದಾಗ ದಾವೀದನೊಂದಿಗೆ
ಸಂಧಾನ ಮಾಡಿ ಅವನ ಸೇವಕನಾದನು. ಅಂದಿನಿಂದ
ಅರಾಮ್ಯರು ಅಮ್ಮೋನಿಯರಿಗೆ ಸಹಾಯ ಮಾಡು
ವುದನ್ನು ನಿರಾಕರಿಸಿದರು.

### ಅಮ್ಮೋನಿಯರನ್ನು ಯೋವಾಬನು ನಾಶಮಾಡಿದ್ದು

20 ವಸಂತಕಾಲದಲ್ಲಿ ರಾಜರುಗಳು ಯುದ್ಧಕ್ಕೆ
ಹೊರಡುವ ಸಮಯ. ಯೋವಾಬನೂ ತನ್ನ
ಸೈನ್ಯದೊಂದಿಗೆ ಯುದ್ಧಕ್ಕೆ ಹೊರಟನು. ಆದರೆ

ದಾವೀದನು ಜೆರುಸಲೇಮಿನಲ್ಲಿಯೇ ಉಳಿದು
ಕೊಂಡನು. ಇಸ್ರೇಲಿನ ಸೈನ್ಯವು ಅಮ್ಮೋನ್ ದೇಶದೊಳಗೆ
ನುಗ್ಗಿ ಅದನ್ನು ನಾಶಮಾಡಿದರು. ಆಮೇಲೆ ರಬ್ಬ ಪಟ್ಟಣಕ್ಕೆ
ಮುತ್ತಿಗೆ ಹಾಕಿ ಸಂಪೂರ್ಣವಾಗಿ ನಾಶ ಮಾಡಿದರು.
2ಅದರ ಅರಸನ ಕಿರೀಟವನ್ನು ದಾವೀದನು ತೆಗೆದು
ಕೊಂಡನು. ಅದು ಎಪ್ಪತ್ತೈದು ಪೌಂಡು ಭಾರವುಳ್ಳ
ದ್ದಾಗಿತ್ತು ಮತ್ತು ಅಮೂಲ್ಯವಾದ ರತ್ನಗಳಿಂದ ಮಾಡಿ
ದ್ದಾಗಿತ್ತು. ಆ ಕಿರೀಟವನ್ನು ದಾವೀದನು ತನ್ನ ತಲೆಯ
ಮೇಲೆ ಇಟ್ಟುಕೊಂಡನು. ಆ ಪಟ್ಟಣದಿಂದ ಇನ್ನೂ ಅನೇಕ
ಬೆಲೆಬಾಳುವ ವಸ್ತುಗಳನ್ನು ಸೂರೆ ಮಾಡಿದರು.
3ದಾವೀದನು ರಬ್ಬದ ಜನರನ್ನು ಸೆರೆಹಿಡಿದ ುಕೊಂಡು
ಬಂದು ಅವರನ್ನು ಮರಕಡಿಯುವುದಕ್ಕೂ ಕೊಡಲಿ
ಮತ್ತು ಹಾರೆಗಳಿಂದ ಕೆಲಸ ಮಾಡುವದಕ್ಕೂ ನೇಮಿಸಿ
ದನು. ಇದೇ ಪ್ರಕಾರ ದಾವೀದನು ಅಮ್ಮೋನಿಯರ
ಎಲ್ಲಾ ಪಟ್ಟಣಗಳಲ್ಲಿಯೂ ಮಾಡಿದನು. ನಂತರ
ದಾವೀದನು ತನ್ನ ಸೈನ್ಯದೊಂದಿಗೆ ಜೆರುಸಲೇಮಿಗೆ
ಹಿಂತಿರುಗಿ ಬಂದನು.

### ಫಿಲಿಷ್ಟಿಯರ ದೈತ್ಯರನ್ನು ಕೊಂದದ್ದು

4ಇದಾದ ಬಳಿಕ ಇಸ್ರೇಲರು ಗೆಜೆರಿನಲ್ಲಿ ಫಿಲಿಷ್ಟಿಯರ
ಜೊತೆಯಲ್ಲಿ ಯುದ್ಧಮಾಡಿದರು. ಹುಷಯವನಾದ
ಸಿಬ್ಬೆಕೈ ಎಂಬವನು, ದೈತ್ಯನ ಮಗನಾದ ಸಿಪ್ಪೈ ಎಂಬವನನ್ನು
ಕೊಂದನು. ಇದರಿಂದಾಗಿ ಫಿಲಿಷ್ಟಿಯರು ಇಸ್ರೇಲರಿಗೆ
ಸೇವೆಮಾಡುವವರಾದರು.
5ಇನ್ನೊಂದು ಸಾರಿ, ಇಸ್ರೇಲರು ಫಿಲಿಷ್ಟಿಯರೊಂದಿಗೆ
ತಿರುಗಿ ಯುದ್ಧಮಾಡುವಾಗ ಯಾಯೀರನ ಮಗನಾದ
ಎಲ್ಹಾನಾನನು ಗೊಲ್ಯಾತನ ತಮ್ಮನಾದ ಲಹ್ಮೀಯನ್ನು
ಕೊಂದನು. ಗೊಲ್ಯಾತನು ಗತ್‌ಪಟ್ಟಣದವನಾಗಿದ್ದನು.
ಲಹ್ಮೀಯ ಈಟಿಯು ಬಹು ಭಾರವಾಗಿತ್ತು. ಕೈಮಗ್ಗದ
ದೊಡ್ಡ ಕುಂಟೆಯಂತಿತ್ತು.
6ಇದಾದನಂತರ ಇನ್ನೊಂದು ಯುದ್ಧವನ್ನು ಇಸ್ರೇಲರು
ಫಿಲಿಷ್ಟಿಯರೊಂದಿಗೆ ಗತ್ ಊರಿನಲ್ಲಿ ಮಾಡಿದರು. ಅಲ್ಲಿ
ಒಬ್ಬ ಎತ್ತರವಾದ ಪುರುಷನಿದ್ದನು. ಅವನ ಕೈಕಾಲುಗಳಿಗೆ
ಆರಾರು ಬೆರಳುಗಳಂತೆ ಒಟ್ಟಿಗೆ ಇಪ್ಪತ್ತನಾಲ್ಕು ಬೆರಳು
ಗಳಿದ್ದವು. ಅವನೂ ರೆಫಾಯನಾಗಿದ್ದನು. 7ಇವನು ಇಸ್ರೇ
ಲರನ್ನು ಪರಿಹಾಸ್ಯಮಾಡಿದಾಗ ದಾವೀದನ ಅಣ್ಣನಾದ
ಶಿಮ್ಮನ ಮಗ ಯೋನಾತಾನನು ಅವನನ್ನು ಕೊಂದು
ಹಾಕಿದನು. 8ಗತ್ ಊರಿನ ರೆಫಾಯರನ್ನು ದಾವೀದನೂ
ಅವನ ಜನರೂ ಕೊಂದುಹಾಕಿದರು.

### ಇಸ್ರೇಲರನ್ನು ಲೆಕ್ಕಿಸಿ ದಾವೀದನು ಪಾಪಮಾಡಿದನು

21 ಸೈತಾನನು ಇಸ್ರೇಲರಿಗೆ ವಿರುದ್ಧವಾಗಿದ್ದನು.
ಅವನು ಇಸ್ರೇಲರನ್ನು ಲೆಕ್ಕಿಸುವಂತೆ ದಾವೀದ
ನನ್ನು ಪ್ರೇರೇಪಿಸಿದನು. 2ದಾವೀದನು ಯೋವಾಬ
ನನ್ನೂ ಇಸ್ರೇಲರ ಇತರ ಅಧಿಪತಿಗಳನ್ನೂ ಕರೆದು
ಅವರಿಗೆ, ‘‘ದೇಶದೊಳಕ್ಕೆ ಹೋಗಿ ಇಸ್ರೇಲರೆಲ್ಲರನ್ನು
ಲೆಕ್ಕಿಸಿರಿ. ಬೇರ್ಷೆಬದಿಂದ ಹಿಡಿದು ದಾನ್ ಪಟ್ಟಣದ
ತನಕ ಎಲ್ಲಾ ಊರುಗಳನ್ನು ಸಂಚರಿಸಿ ಜನರನ್ನು ಲೆಕ್ಕಿಸಿರಿ.
ಆಗ ನನಗೆ ನನ್ನ ರಾಜ್ಯದ ಜನಸಂಖ್ಯೆಯು ತಿಳಿಯುವದು’’
ಅಂದನು.
3ಅದಕ್ಕೆ ಉತ್ತರವಾಗಿ ಯೋವಾಬನು, ‘‘ಯೆಹೋ
ವನು ತನ್ನ ಜನಾಂಗವನ್ನು ನೂರುಪಟ್ಟು ಅಭಿವೃದ್ಧಿ
ಪಡಿಸಲಿ. ಅರಸನೇ, ನೀನು ಈ ಕಾರ್ಯವನ್ನು ಯಾಕೆ
ಮಾಡಿಸಬೇಕು? ಹೀಗೆ ಮಾಡಿದರೆ ನೀನು ಎಲ್ಲಾ
ಇಸ್ರೇಲರನ್ನು ಪಾಪದಲ್ಲಿ ಬೀಳುವಂತೆ ಮಾಡುತ್ತಿರುವೆ’’
ಎಂದು ಹೇಳಿದನು.
4ಆದರೆ ಅರಸನಾದ ದಾವೀದನು ತನ್ನ ನಿರ್ಧಾರವನ್ನು
ಬದಲಿಸಲಿಲ್ಲ. ದಾವೀದನು ಹೇಳಿದಂತೆಯೇ ಯೋವಾ
ಬನು ಮಾಡಬೇಕಾಯಿತು. ಯೋವಾಬನು ದೇಶದ
ಎಲ್ಲಾ ಕಡೆಗಳಿಗೆ ಹೋಗಿ ಜನರನ್ನು ಲೆಕ್ಕಿಸಿ ಜೆರುಸ
ಲೇಮಿಗೆ ಬಂದನು. 5ಅರಸನಿಗೆ ಜನಗಣತಿಯ ಲೆಕ್ಕ
ಒಪ್ಪಿಸಿದನು. ಇಸ್ರೇಲಿನಲ್ಲಿ ಒಟ್ಟು ಹನ್ನೊಂದು ಲಕ್ಷ
ಮಂದಿ ಖಡ್ಗ ಉಪಯೋಗಿಸುವವರು ಇದ್ದರು. ಯೆಹೂ
ದದಲ್ಲಿ ನಾಲ್ಕು ಲಕ್ಷದ ಎಪ್ಪತ್ತು ಸಾವಿರ ಮಂದಿ ಖಡ್ಗ
ಉಪಯೋಗಿಸುವವರಿದ್ದರು. 6ಯೋವಾಬನು ಲೇವಿ
ಕುಲದವರನ್ನು ಮತ್ತು ಬೆನ್ಯಾಮೀನನ ಕುಲದವರನ್ನು
ಜನಗಣತಿಯಲ್ಲಿ ಸೇರಿಸಲಿಲ್ಲ; ಯಾಕೆಂದರೆ ದಾವೀದನ
ಆಜ್ಞೆಯು ಅವನಿಗೆ ಸರಿಕಾಣಲಿಲ್ಲ. 7ದೇವರ ದೃಷ್ಟಿಯಲ್ಲಿ
ದಾವೀದನು ದೊಡ್ಡ ತಪ್ಪು ಕೆಲಸವನ್ನು ಮಾಡಿದನು.
ಆದ್ದರಿಂದ ದೇವರು ಇಸ್ರೇಲನ್ನು ಶಿಕ್ಷಿಸಿದನು.

### ಇಸ್ರೇಲಿಗೆ ದೇವರ ದಂಡನೆ

8ದಾವೀದನು ದೇವರಿಗೆ, ‘‘ನಾನು ಕೇವಲ ಹುಚ್ಚು
ಕೆಲಸ ಮಾಡಿದೆನು. ಇಸ್ರೇಲರ ಜನಗಣತಿ ಮಾಡಿ ಪಾಪ
ಮಾಡಿದೆನು. ಈಗ ನಿನ್ನ ಸೇವಕನಾದ ನನ್ನ ಪಾಪವನ್ನು
ನಿರ್ಮೂಲ ಮಾಡು’’ ಎಂದು ಬೇಡಿಕೊಂಡನು.
9-10ಗಾದನು ದಾವೀದನ ಪ್ರವಾದಿಯಾಗಿದ್ದನು.
ಯೆಹೋವನು ಗಾದನಿಗೆ, ‘‘ನೀನು ದಾವೀದನಿಗೆ ಹೀಗೆ
ಹೇಳು: ‘ಇದು ಯೆಹೋವನ ನುಡಿ. ನಾನು ನಿನಗೆ ಕೊಡ
ಲಿರುವ ಮೂರು ಶಿಕ್ಷೆಯಲ್ಲಿ ಒಂದನ್ನು ಆರಿಸಿ
ಕೊಳ್ಳಬೇಕು. ನೀನು ಆರಿಸಿಕೊಂಡ ಪ್ರಕಾರವೇ ನಾನು
ನಿನ್ನನ್ನು ಶಿಕ್ಷಿಸುವೆನು’’ ಅಂದನು.
11-12ಗಾದನು ದಾವೀದನ ಬಳಿಗೆ ಹೋಗಿ, ‘‘ಯೆಹೋ
ವನು ಹೀಗನ್ನುತ್ತಾನೆ: ‘ನೀನು ಸಹಿಸಿಕೊಳ್ಳಬಲ್ಲ
ಶಿಕ್ಷೆಯನ್ನು ಆರಿಸಿಕೋ. ಮೂರು ವರ್ಷಗಳ ಬರಗಾಲ;
ಅಥವಾ ನಿನ್ನ ವೈರಿಗಳಿಗೆ ಮೂರು ತಿಂಗಳು ಶರಣಾ
ಗುವಿಕೆ; ಅಥವಾ ಮೂರು ದಿವಸ ಕಾಲ ಭಯಂಕರ

ಕಾಯಿಲೆಯು ನಿನ್ನ ರಾಜ್ಯವೆಲ್ಲಾ ಹಬ್ಬುವದು;
ಯೆಹೋವನ ದೂತನು ಇಡೀ ಇಸ್ರೇಲನ್ನು ದಾಟಿ
ಸಿಕ್ಕಿದವರನ್ನೆಲ್ಲಾ ಹತಿಸಿಬಿಡುವನು.' ದಾವೀದನೇ,
ನನ್ನನ್ನು ನಿನ್ನ ಬಳಿಗೆ ದೇವರೇ ಕಳುಹಿಸಿರುತ್ತಾನೆ. ನೀನು
ಯಾವ ಶಿಕ್ಷೆಯನ್ನು ಆರಿಸಿಕೊಳ್ಳುವಿ ಎಂಬುದನ್ನು ನನಗೆ
ತಿಳಿಸು.''

[13]ಆಗ ಗಾದನಿಗೆ ದಾವೀದನು, ''ನಾನು ಈಗ ಕಷ್ಟದಲ್ಲಿ
ಬಿದ್ದಿದ್ದೇನೆ! ನನ್ನ ಶಿಕ್ಷೆಯನ್ನು ಮನುಷ್ಯನು ನಿರ್ಧರಿಸ
ಬಾರದು. ಯೆಹೋವನು ಕರುಣೆಯುಳ್ಳವನು. ಆದುದ
ರಿಂದ ಆತನೇ ನಿರ್ಧರಿಸಲಿ.''

[14]ಆಗ ಯೆಹೋವನು ಇಸ್ರೇಲರ ಮೇಲೆ ಬಹು
ಘೋರವಾದ ವ್ಯಾಧಿಯನ್ನು ಕಳುಹಿಸಿದ್ದರಿಂದ ಎಪ್ಪತ್ತು
ಸಾವಿರ ಜನರು ಸತ್ತುಹೋದರು. [15]ದೇವರು ಜೆರುಸ
ಲೇಮಿನ ಜನರನ್ನು ನಾಶನ ಮಾಡುವುದಕ್ಕೆ ದೂತನನ್ನು
ಕಳುಹಿಸಿದನು. ಯೆಹೋವನು ಅದನ್ನು ನೋಡಿ ದುಃಖ
ಗೊಂಡು ಜನರನ್ನು ನಾಶಮಾಡಲು ಬಂದಿದ್ದ ದೂತನಿಗೆ,
''ಸಾಕು, ಇನ್ನು ನಿಲ್ಲಿಸು'' ಅಂದನು. ಯೆಹೋವನ
ದೂತನು ಯೆಬೂಸಿಯನಾದ ಒರ್ನಾನನ ಕಣದಲ್ಲಿ
ನಿಂತುಕೊಂಡಿದ್ದನು.

[16]ದಾವೀದನು ಮೇಲಕ್ಕೆ ನೋಡಿದಾಗ ಯೆಹೋವನ
ದೂತನು ಭೂಮ್ಯಾಕಾಶಗಳ ನಡುವೆ ನಿಂತಿರುವುದನ್ನು
ಕಂಡನು. ದೇವದೂತನು ತನ್ನ ಖಡ್ಗವನ್ನು ಜೆರುಸಲೇ
ಮಿನ ಮೇಲೆ ಚಾಚಿದ್ದನು. ಆಗ ದಾವೀದನೂ ಅವ
ನೊಂದಿಗಿದ್ದ ಹಿರಿಯರೂ ಬಗ್ಗಿ ನೆಲದ ಮೇಲೆ
ಮುಖಗಳನ್ನಿಟ್ಟು ನಮಸ್ಕರಿಸಿದರು. ಅವರು ಶೋಕ
ವಸ್ತ್ರಗಳನ್ನು ಧರಿಸಿದ್ದರು. [17]ದಾವೀದನು ದೇವರಿಗೆ,
''ಪಾಪಮಾಡಿದವನು ನಾನು. ಜನಗಣತಿಯನ್ನು
ಮಾಡಲು ಆಜ್ಞಾಪಿಸಿದವನು ನಾನೇ. ನಾನು ತಪ್ಪು
ಮಾಡಿದೆ! ಆದರೆ ಇಸ್ರೇಲರು ಏನೂ ತಪ್ಪು ಮಾಡಲಿಲ್ಲ.
ದೇವರಾದ ಯೆಹೋವನೇ, ನನ್ನನ್ನೂ ನನ್ನ ಪರಿ
ವಾರದವರನ್ನೂ ಶಿಕ್ಷಿಸು. ನಿನ್ನ ಜನರನ್ನು ಸಾಯಿಸುವ
ವ್ಯಾಧಿಯನ್ನು ನಿಲ್ಲಿಸು'' ಎಂದು ಬೇಡಿಕೊಂಡನು.

[18]ಆಗ ಯೆಹೋವನದೂತನು ಗಾದನೊಂದಿಗೆ ಮಾತ
ನಾಡಿ, ''ದಾವೀದನು ಒಂದು ಯಜ್ಞವೇದಿಕೆಯನ್ನು
ಯೆಬೂಸಿಯನಾದ ಒರ್ನಾನನ ಕಣದ ಬಳಿಯಲ್ಲಿ ಕಟ್ಟಿ
ಯೆಹೋವನನ್ನು ಆರಾಧಿಸಲಿ'' ಎಂದು ಹೇಳಿದನು.
[19]ಗಾದನು ದಾವೀದನಿಗೆ ಇದನ್ನು ತಿಳಿಸಿದ ಕೂಡಲೇ
ಅವನು ಒರ್ನಾನನ ಕಣಕ್ಕೆ ಹೋದನು.

[20]ಒರ್ನಾನನು ಗೋಧಿಯನ್ನು ತನ್ನ ಕಣದಲ್ಲಿ
ಬಡಿಯುತ್ತಾ ತಿರುಗಿನೋಡಿದಾಗ ದೇವದೂತನನ್ನು
ಕಂಡನು. ಅವನ ನಾಲ್ಕು ಮಂದಿ ಗಂಡುಮಕ್ಕಳು ಓಡಿ
ಹೋಗಿ ಅವಿತುಕೊಂಡರು. [21]ದಾವೀದನು ಒರ್ನಾನನ
ಬಳಿಗೆ ಬೆಟ್ಟ ಹತ್ತಿಕೊಂಡು ಬರುತ್ತಿರುವುದನ್ನು ಒರ್ನಾ
ನನು ಕಂಡು ಅವನನ್ನು ಎದುರುಗೊಂಡು ಬಗ್ಗಿ
ನಮಸ್ಕರಿಸಿದನು.

[22]ದಾವೀದನು ಒರ್ನಾನನಿಗೆ, ''ನಿನ್ನ ಕಣವನ್ನು ನನಗೆ
ಕ್ರಯಕ್ಕೆ ಮಾರಿಬಿಡು. ನಾನು ಇಲ್ಲಿ ಯಜ್ಞವೇದಿಕೆಯನ್ನು
ಕಟ್ಟಿ ದೇವರನ್ನು ಆರಾಧಿಸಬೇಕು. ಆಗ ಈ ಭಯಂಕರ
ವ್ಯಾಧಿಯು ನಿಂತುಹೋಗುವುದು'' ಅಂದನು.

[23]ಆಗ ಒರ್ನಾನನು, ''ನೀನು ನನ್ನ ಒಡೆಯನೂ
ಅರಸನೂ ಆಗಿರುವಿ. ಈ ಕಣವನ್ನು ನೀನೇ ತೆಗೆದುಕೋ.
ನೀನು ಏನು ಬೇಕಾದರೂ ಮಾಡು. ಸರ್ವಾಂಗ
ಹೋಮಕ್ಕೆ ಬೇಕಾದ ಕಟ್ಟಿಗೆಗಾಗಿ ನೇಗಿಲುಗಳನ್ನೂ
ಧಾನ್ಯಾರ್ಪಣೆಗೆ ಬೇಕಾದ ಗೋಧಿಯನ್ನೂ ಪಶುವನ್ನೂ
ನಾನು ಕೊಡುತ್ತೇನೆ'' ಅಂದನು.

[24]ಅದಕ್ಕೆ ದಾವೀದನು, ''ನೋಡು, ನಾನು ಅವಕ್ಕೆಲ್ಲಾ
ಪೂರ್ಣಕ್ರಯ ಕೊಡುತ್ತೇನೆ. ನಿನ್ನಿಂದ ನಾನು ಪುಕ್ಕಟೆ
ಯಾಗಿ ತೆಗೆದುಕೊಂಡದ್ದನ್ನು ದೇವರಿಗೆ ಸಮರ್ಪಿಸು
ವುದಿಲ್ಲ. ಧರ್ಮಾರ್ಥವಾಗಿ ದೊರೆತದ್ದನ್ನು ದೇವರಿಗೆ
ಕಾಣಿಕೆಯಾಗಿ ಕೊಡುವದಿಲ್ಲ'' ಎಂದನು.

[25]ದಾವೀದನು ಒರ್ನಾನನಿಗೆ ಹದಿನೈದು ಪೌಂಡ್
ಬಂಗಾರವನ್ನು ಕೊಟ್ಟು ಆ ಸ್ಥಳವನ್ನು ಕೊಂಡು
ಕೊಂಡನು. [26]ಅಲ್ಲಿ ದೇವರನ್ನು ಆರಾಧಿಸಲು ಒಂದು
ಯಜ್ಞವೇದಿಕೆಯನ್ನು ಕಟ್ಟಿಸಿದನು. ದಾವೀದನು ಅದರ
ಮೇಲೆ ಸರ್ವಾಂಗಹೋಮವನ್ನೂ ಸಮಾಧಾನ ಯಜ್ಞ
ವನ್ನೂ ಅರ್ಪಿಸಿದನು. ದಾವೀದನು ಯೆಹೋವನಿಗೆ
ಪ್ರಾರ್ಥಿಸಿದನು. ಯೆಹೋವನು ಪರಲೋಕದಿಂದ ಬೆಂಕಿ
ಯನ್ನು ಕಳುಹಿಸುವುದರ ಮೂಲಕ ದಾವೀದನಿಗೆ
ಉತ್ತರಿಸಿದನು. ಸರ್ವಾಂಗಹೋಮಗಳ ಯಜ್ಞವೇದಿ
ಕೆಯ ಮೇಲೆ ಬೆಂಕಿಯು ಇಳಿದುಬಂದಿತು. [27]ಆಗ
ದೇವರು ತನ್ನ ದೂತನಿಗೆ ಖಡ್ಗವನ್ನು ಒರೆಯಲ್ಲಿ ಹಾಕಲು
ಆಜ್ಞಾಪಿಸಿದನು.

[28]ದೇವರು ತನ್ನ ಪ್ರಾರ್ಥನೆಯನ್ನು ಕೇಳಿ ಉತ್ತರ
ಕೊಟ್ಟದ್ದನ್ನು ಕಂಡು ದಾವೀದನು ಆತನಿಗೆ ಯಜ್ಞಗಳನ್ನು
ಸಮರ್ಪಿಸಿದನು. [29]ಆಗ ಪವಿತ್ರಗುಡಾರವು ಮತ್ತು ಯಜ್ಞ
ವೇದಿಕೆಯು ಗಿಬ್ಯೋನ್ ಪಟ್ಟಣದ ಎತ್ತರದ ಪ್ರದೇಶ
ದಲ್ಲಿತ್ತು. ಇಸ್ರೇಲರು ಅರಣ್ಯದಲ್ಲಿ ಪ್ರಯಾಣ ಮಾಡುತ್ತಿ
ರುವಾಗ ಮೋಶೆಯು ಆ ಗುಡಾರವನ್ನು ಮಾಡಿಸಿದ್ದನು.
[30]ದಾವೀದನು ದೇವರ ಸಂಗಡ ಮಾತನಾಡಲು ಭಯ
ಪಟ್ಟದ್ದರಿಂದ ದೇವದರ್ಶನ ಗುಡಾರಕ್ಕೆ ಹೋಗಲಿಲ್ಲ.
ಅವನು ಖಡ್ಗಧಾರಿಯಾಗಿದ್ದ ದೇವದೂತನಿಗೂ ಭಯ
ಪಟ್ಟನು.

22 ಆಗ ದಾವೀದನು, ''ದೇವರ ಆಲಯವೂ ಆತನ
ಯಜ್ಞವೇದಿಕೆಯೂ ಇದೇ ಸ್ಥಳದಲ್ಲಿ ಕಟ್ಟಲ್ಪಡು
ವದು'' ಅಂದನು.

### ದೇವಾಲಯವನ್ನು ಕಟ್ಟಲು ದಾವೀದನ ಯೋಜನೆ

2ಇಸ್ರೇಲಿನಲ್ಲಿ ವಾಸಿಸುತ್ತಿದ್ದ ಪರದೇಶಸ್ಥರನ್ನೆಲ್ಲಾ
ದಾವೀದನು ಬರಹೇಳಿ ಅವರಲ್ಲಿಂದ ಕಲ್ಲುಕುಟಿಗರನ್ನು
ಆರಿಸಿ ತೆಗೆದುಕೊಂಡನು. ದೇವಾಲಯವನ್ನು ಕಟ್ಟಲು
ಕಲ್ಲುಗಳನ್ನು ಕೆತ್ತಿ ತಯಾರಿಸುವ ಕೆಲಸ ಅವರದಾಗಿತ್ತು.
3ದೇವಾಲಯದ ಬಾಗಿಲುಗಳಿಗೆ ಬೇಕಾದ ಮೊಳೆಗಳಿಗೆ
ಮತ್ತು ಕೀಲುಗಳಿಗೆ ಬೇಕಾದ ಕಬ್ಬಿಣವನ್ನು ಶೇಖರಿ
ಸಿಟ್ಟನು. ಅವನು ತನ್ನ ಬಳಿಯಲ್ಲಿ ತೂಕ ಮಾಡಲು
ಸಾಧ್ಯವಾಗದಷ್ಟು ತಾಮ್ರವನ್ನು ಶೇಖರಿಸಿಟ್ಟಿದ್ದನು.
4ಅಲ್ಲದೆ ಲೆಕ್ಕಮಾಡಲು ಅಸಾಧ್ಯವಾದಷ್ಟು ದೇವದಾರು
ಮರಗಳ ದಿಮ್ಮಿಯನ್ನು ಕೂಡಿಸಿಟ್ಟಿದ್ದನು. ತೂರ್ಯರು
ಮತ್ತು ಚೀದೋನಿನವರು ಆ ದಿಮ್ಮಿಗಳನ್ನು ದಾವೀದನಿಗೆ
ತಂದುಕೊಟ್ಟಿದ್ದರು.
5ದಾವೀದನು, ‘‘ನಾವು ನಮ್ಮ ದೇವರಿಗೆ ಮಹಾದೊಡ್ಡ
ಆಲಯವನ್ನು ಕಟ್ಟಸಬೇಕು. ಆದರೆ ನನ್ನ ಮಗನಾದ
ಸೊಲೊಮೋನನು ಇನ್ನೂ ಎಳೆಪ್ರಾಯದವನು; ಅವನು
ಕಲಿಯಬೇಕಾದದ್ದು ಇನ್ನೂ ಬೇಕಾದಷ್ಟಿದೆ. ದೇವಾ
ಲಯವು ಎಲ್ಲಾ ಜನಾಂಗಗಳಲ್ಲಿ ಪ್ರಸಿದ್ಧವಾಗಿದ್ದು ಅದರ
ಸೌಂದರ್ಯ ಮತ್ತು ವಿನ್ಯಾಸವು ಹೆಸರುವಾಸಿ
ಯಾಗಿರಬೇಕು. ಅದಕ್ಕಾಗಿಯೇ ನಾನು ಆ ದೇವಾ
ಲಯಕ್ಕಾಗಿ ಸಮಸ್ತವನ್ನು ಸಿದ್ಧಪಡಿಸುತ್ತೇನೆ’’ ಅಂದು
ಕೊಂಡನು. ಅಲ್ಲದೆ ಅವನು ಸಾಯುವುದಕ್ಕಿಂತ ಮುಂಚೆ
ದೇವಾಲಯವನ್ನು ಕಟ್ಟುವುದಕ್ಕೆ ಬೇಕಾಗಿರುವವುಗ
ಳನ್ನೆಲ್ಲಾ ಕೂಡಿಸಿಟ್ಟನು.
6ದಾವೀದನು ತನ್ನ ಮಗನಾದ ಸೊಲೊಮೋನನನ್ನು
ಕರೆದು ಇಸ್ರೇಲಿನ ದೇವರಾದ ಯೆಹೋವನಿಗೆ ಆಲಯ
ವನ್ನು ಕಟ್ಟುವಂತೆ ಹೇಳಿದನು. 7ದಾವೀದನು ಸೊಲೊ
ಮೋನನಿಗೆ, ‘‘ನನ್ನ ಮಗನೇ, ನಾನು ನನ್ನ ದೇವರ
ಹೆಸರಿಗಾಗಿ ಒಂದು ಆಲಯವನ್ನು ಕಟ್ಟಬೇಕೆಂದಿದ್ದೆನು.
8ಆದರೆ ಯೆಹೋವನು ನನಗೆ, ‘ದಾವೀದನೇ, ನೀನು
ಅನೇಕ ಯುದ್ಧಗಳನ್ನು ಮಾಡಿ ಅನೇಕರನ್ನು ಕೊಂದಿ
ರುತ್ತೀ. ಹೀಗಿರುವದರಿಂದ ನೀನು ನನಗೆ ಆಲಯವನ್ನು
ಕಟ್ಟಬಾರದು. 9ಆದರೆ ನಿನ್ನ ನಂತರ ಬರುವ ನಿನ್ನ ಮಗನು
ಸಮಾಧಾನ ಪುರುಷನಾಗಿರುವನು. ಅವನ ರಾಜ್ಯದಲ್ಲಿ
ನಾನು ಶಾಂತಿಯನ್ನು ನೆಲೆಗೊಳಿಸುವೆನು. ಅವನ
ಸುತ್ತಮುತ್ತಲಿರುವ ವೈರಿಗಳಿಂದ ಅವನಿಗೆ ಯಾವ ಕೇಡೂ
ಉಂಟಾಗದು. ಅವನೇ ಸೊಲೊಮೋನನು. ಅವನ
ಕಾಲದಲ್ಲಿ ಇಸ್ರೇಲರು ಸಮಾಧಾನದಿಂದ ವಾಸಿಸುವರು.
10ಅವನು ನನ್ನ ಹೆಸರಿಗಾಗಿ ಆಲಯವನ್ನು ಕಟ್ಟುವನು.
ಅವನು ನನ್ನ ಮಗನಾಗಿರುವನು; ನಾನು ಅವನಿಗೆ
ತಂದೆಯಾಗಿರುವೆನು. ನಾನು ಅವನ ರಾಜ್ಯವನ್ನು ಬಲ
ಗೊಳಿಸುವೆನು; ಅವನ ಸಂತಾನದವರು ಇಸ್ರೇಲ್
ರಾಜ್ಯವನ್ನು ನಿರಂತರಕ್ಕೂ ಆಳುವರು’’’ ಎಂದು ಹೇಳಿ
ದನು. 11‘‘ಮಗನೇ, ನೀನು ದೇವಾಲಯವನ್ನು ಕಟ್ಟು
ವಾಗ ಯೆಹೋವನು ನಿನ್ನ ಸಂಗಡವಿದ್ದು ನಿನಗೆ
ಯಶಸ್ಸನ್ನು ದಯಪಾಲಿಸಲಿ. 12ಯೆಹೋವನು ನಿನ್ನನ್ನು
ಇಸ್ರೇಲರಿಗೆ ಅರಸನನ್ನಾಗಿ ಮಾಡುವನು. ನೀನು ಆತನ
ಆಜ್ಞೆಗಳನ್ನು ಅನುಸರಿಸಿ, ದಕ್ಷತೆಯಿಂದ ರಾಜ್ಯಭಾರ
ಮಾಡುವದಕ್ಕೆ ಬೇಕಾದ ಜ್ಞಾನವನ್ನು ನಿನಗೆ ದಯ
ಪಾಲಿಸಲಿ. 13ಯೆಹೋವನು ಮೋಶೆಗೆ ಕೊಟ್ಟಿರುವ
ಕಟ್ಟಳೆಗಳನ್ನು ನೀನು ಜಾಗ್ರತೆಯಾಗಿ ಅನುಸರಿಸಿ ನಡೆದರೆ
ನಿನಗೆ ಯಶಸ್ಸು ಪ್ರಾಪ್ತವಾಗುವುದು. ಸ್ಥಿರಚಿತ್ತನಾಗಿರು;
ಧೈರ್ಯದಿಂದಿರು; ಹೆದರಬೇಡ; ಕಳವಳಪಡಬೇಡ.
14‘‘ಸೊಲೊಮೋನನೇ, ನಾನು ಬಹು ಪ್ರಯಾಸಪಟ್ಟು
ಯೆಹೋವನ ಆಲಯಕ್ಕೋಸ್ಕರ ಮೂರು ಸಾವಿರದ
ಏಳುನೂರೈವತ್ತು ಟನ್ ಬಂಗಾರ, ಮೂವತ್ತೇಳು
ಸಾವಿರದ ಐನೂರು ಟನ್ ಬೆಳ್ಳಿ ಮತ್ತು ತೂಕ ಮಾಡ
ಲಾಗದಷ್ಟು ತಾಮ್ರ ಮತ್ತು ಕಬ್ಬಿಣವನ್ನು ಕೂಡಿಸಿಟ್ಟಿದ್ದೇನೆ.
ಅಲ್ಲದೆ ಮರಗಳನ್ನು ಮತ್ತು ಕಲ್ಲುಗಳನ್ನು ಕೊಟ್ಟಿರುತ್ತೇನೆ.
ಸೊಲೊಮೋನನೇ, ನೀನು ಇವುಗಳಿಗೆ ಇನ್ನೂ ಕೂಡಿಸು.
15ನಿನ್ನ ಬಳಿಯಲ್ಲಿ ಅನೇಕ ಬಡಗಿಗಳು ಮತ್ತು ಕಲ್ಲು
ಕುಟಿಗರು ಇದ್ದಾರೆ. ಬೇರೆ ಕೆಲಸಗಳ ಕುಶಲಕರ್ಮಿಗಳೂ
16ಬಂಗಾರದ ಕೆಲಸಗಾರರೂ ಬೆಳ್ಳಿ, ತಾಮ್ರ, ಕಬ್ಬಿಣದ
ಕೆಲಸಗಾರರೂ ಲೆಕ್ಕವಿಲ್ಲದಷ್ಟು ಇದ್ದಾರೆ. ಈಗ ನೀನು
ಕೆಲಸ ಪ್ರಾರಂಭಿಸು. ದೇವರು ನಿನ್ನ ಸಂಗಡವಿರಲಿ’’
ಎಂದು ಹೇಳಿದನು.
17ಬಳಿಕ ತನ್ನ ಮಗನಾದ ಸೊಲೊಮೋನನೊಂದಿಗೆ
ಸಹಕರಿಸಲು ಇಸ್ರೇಲರ ಮುಖಂಡರಿಗೆ ಆಜ್ಞಾಪಿಸಿದನು.
18ಬಳಿಕ ತನ್ನ ಮಾತನ್ನು ಮುಂದುವರಿಸಿ, ‘‘ದೇವರಾದ
ಯೆಹೋವನು ನಿಮ್ಮೊಂದಿಗಿದ್ದಾನೆ. ಆತನು ನಿಮಗೆ
ಸಮಾಧಾನವನ್ನು ಅನುಗ್ರಹಿಸಿರುತ್ತಾನೆ. ನಮ್ಮ ಸುತ್ತ
ಮುತ್ತಲಿನ ಶತ್ರುಗಳನ್ನು ಸೋಲಿಸಲು ಆತನು ನಮಗೆ
ಸಹಾಯಮಾಡಿದ್ದಾನೆ. ಈಗ ಯೆಹೋವನೂ ಆತನ
ಜನರೂ ಈ ದೇಶವನ್ನು ತಮ್ಮ ವಶದಲ್ಲಿಟ್ಟುಕೊಂಡಿ
ದ್ದಾರೆ. 19ಈಗ ನಿಮ್ಮ ಹೃದಯಗಳನ್ನೂ ಆತ್ಮಗಳನ್ನೂ
ನಿಮ್ಮ ದೇವರಾದ ಯೆಹೋವನಿಗೆ ಕೊಡಿರಿ. ಆತನಿಗೆ
ಪರಿಶುದ್ಧ ನಿವಾಸವನ್ನು ಆತನ ಹೆಸರಿಗಾಗಿ ಕಟ್ಟಿರಿ;
ಒಡಂಬಡಿಕೆಯ ಪೆಟ್ಟಿಗೆಯನ್ನೂ ಇತರ ಪವಿತ್ರ ಸಾಮಾಗ್ರಿ
ಗಳನ್ನೂ ಆತನ ಆಲಯಕ್ಕೆ ತನ್ನಿರಿ’’ ಎಂದು ಹೇಳಿದನು.

### ದೇವಾಲಯದಲ್ಲಿ ಲೇವಿಯರ ಸೇವಾಕಾರ್ಯ

23 ದಾವೀದನು ಬಹಳ ಮುದುಕನಾದಾಗ ತನ್ನ
ಮಗನಾದ ಸೊಲೊಮೋನನನ್ನು ಇಸ್ರೇಲರ
ಅರಸನನ್ನಾಗಿ ಮಾಡಿದನು. 2ದಾವೀದನು ರಾಜ್ಯದ ಎಲ್ಲಾ
ಮುಖಂಡರುಗಳನ್ನೂ ಯಾಜಕರನ್ನೂ ಲೇವಿಯರನ್ನೂ
ಕರೆದನು. 3ಅವನು ಮೂವತ್ತು ವರ್ಷದ ಮತ್ತು ಅದಕ್ಕಿಂತ

ಮೇಲ್ಪಟ್ಟ ಲೇವಿಯರನ್ನು ಲೆಕ್ಕಿಸಿದಾಗ ಒಟ್ಟು ಮೂವ
ತ್ತೆಂಟು ಸಾವಿರ ಮಂದಿ ಪುರುಷರಿದ್ದರು. 4“ದಾವೀದನು
ಇವರಲ್ಲಿ ಇಪ್ಪತ್ನಾಲ್ಕು ಸಾವಿರ ಮಂದಿ ಲೇವಿಯರು
ದೇವಾಲಯದ ಕಟ್ಟಡದ ಮೇಲ್ವಿಚಾರಕರಾಗಿಯೂ
ಆರು ಸಾವಿರ ಮಂದಿ ಲೇವಿಯರು ನ್ಯಾಯಾಧೀಶ
ರಾಗಿಯೂ ಕಾನೂನು ಪಾಲಕರಾಗಿಯೂ 5ನಾಲ್ಕು
ಸಾವಿರ ಮಂದಿ ಲೇವಿಯರು ದ್ವಾರಪಾಲಕರಾಗಿಯೂ
ನಾಲ್ಕು ಸಾವಿರ ಮಂದಿ ಲೇವಿಯರು ಗಾಯಕರಾಗಿಯೂ
ಸೇವೆ ಮಾಡಬೇಕು. ನಾನು ಅವರಿಗಾಗಿ ವಿಶೇಷ ವಾದ್ಯ
ಗಳನ್ನು ತಯಾರಿಸಿಟ್ಟಿರುತ್ತೇನೆ. ಅವರು ಅವುಗಳನ್ನು
ನುಡಿಸುತ್ತಾ ದೇವರಿಗೆ ಸ್ತೋತ್ರ ಮಾಡಬೇಕು” ಅಂದನು.
6ದಾವೀದನು ಲೇವಿಯರನ್ನು ಮೂರು ಗುಂಪುಗಳ
ನ್ನಾಗಿ ಮಾಡಿದನು. ಗೇರ್ಷೋನ್ಯರು, ಕೆಹಾತ್ಯರು ಮತ್ತು
ಮೆರಾರೀಯರು.

## ಗೇರ್ಷೋನ್ ಕುಲದವರು

7ಗೇರ್ಷೋನ್‌ಕುಲದಲ್ಲಿ ಲದ್ದಾನ್ ಮತ್ತು ಶಿಮ್ಮೀ
ಎಂಬವರಿದ್ದರು. 8ಲದ್ದಾನನಿಗೆ ಮೂವರು ಗಂಡು
ಮಕ್ಕಳು. ಮೊದಲನೆ ಮಗನು ಯೆಹೀಯೇಲ್. ಉಳಿದ
ಇನ್ನಿಬ್ಬರು ಜೇತಾಮ್ ಮತ್ತು ಯೋವೇಲ್. 9ಶಿಮ್ಮೀ
ಯನ ಗಂಡುಮಕ್ಕಳು ಯಾರೆಂದರೆ: ಶೆಲೋಮೋತ್,
ಹಜೀಯೇಲ್ ಮತ್ತು ಹಾರಾನ್. ಈ ಮೂವರು
ಲದ್ದಾನನ ಸಂತತಿಯವರ ಮುಖಂಡರಾಗಿದ್ದರು.
10ಶಿಮ್ಮೀಗೆ ನಾಲ್ಕು ಮಂದಿ ಗಂಡುಮಕ್ಕಳು. ಅವರು
ಯಾರೆಂದರೆ: ಯಹತ್, ಜೀಜ, ಯೆಯೂಷ್ ಮತ್ತು
ಬೆರೀಯ. 11ಯಹತನು ಚೊಚ್ಚಲಮಗನು. ಜೀಜನು
ಎರಡನೆಯವನು. ಯೆಯೂಷನಿಗೂ ಬೆರೀಯನಿಗೂ
ಹೆಚ್ಚು ಮಕ್ಕಳಿರಲಿಲ್ಲ. ಆದುದರಿಂದ ಅವರಿಬ್ಬರನ್ನು
ಒಂದೇ ಕುಟುಂಬವೆಂದು ಲೆಕ್ಕಿಸಲಾಯಿತು.

## ಕೆಹಾತನ ಕುಲದವರು

12ಕೆಹಾತನಿಗೆ ನಾಲ್ಕು ಮಂದಿ ಗಂಡುಮಕ್ಕಳು:
ಅಮ್ರಾಮ್, ಇಚ್ಹಾರ್, ಹೆಬ್ರೋನ್ ಮತ್ತು ಉಜ್ಜೀ
ಯೇಲ್. 13ಅಮ್ರಾಮನ ಗಂಡುಮಕ್ಕಳು ಯಾರೆಂದರೆ:
ಆರೋನ್ ಮತ್ತು ಮೋಶೆ. ಆರೋನನು ಮತ್ತು ಅವನ
ಸಂತತಿಯವರು ಮಹಾಪರಿಶುದ್ಧವಾದ ವಸ್ತುಗಳನ್ನು
ಪ್ರತಿಷ್ಠಿಸುವುದಕ್ಕೆ ಪ್ರತ್ಯೇಕಿಸಲ್ಪಟ್ಟರು; ಇವರು ಯೆಹೋ
ವನ ಸನ್ನಿಧಿಯಲ್ಲಿ ಸದಾಕಾಲ ಧೂಪ ಸುಡುವುದಕ್ಕಾ
ಗಿಯೂ ಆತನ ಸೇವೆಮಾಡುವುದಕ್ಕಾಗಿಯೂ ಯೆಹೋ
ವನ ಹೆಸರಿನಲ್ಲಿ ಜನರನ್ನು ಸದಾಕಾಲ ಆಶೀರ್ವ
ದಿಸುವುದಕ್ಕಾಗಿಯೂ ಆರಿಸಲ್ಪಟ್ಟರು.
14ಮೋಶೆಯು ದೇವರ ಮನುಷ್ಯನಾಗಿದ್ದನು. ಅವನ
ಮಕ್ಕಳು ಲೇವಿಕುಲದಲ್ಲಿ ಸೇರಿಸಲ್ಪಟ್ಟಿದ್ದರು.
15ಮೋಶೆಯ ಮಕ್ಕಳು ಯಾರೆಂದರೆ: ಗೇರ್ಷೋಮ್
ಮತ್ತು ಎಲೀಯೆಜೆರ್. 16ಗೇರ್ಷೋಮನ ಚೊಚ್ಚಲ
ಮಗನು ಶೆಬೂವೇಲ. 17ಎಲೀಯೆಜರನ ಚೊಚ್ಚಲ
ಮಗನು ರೆಹಬ್ಯ. ಎಲೀಯೆಜೆರನಿಗೆ ಬೇರೆ ಮಕ್ಕಳಿರಲಿಲ್ಲ.
ಆದರೆ ರೆಹಬ್ಯನಿಗೆ ಅನೇಕ ಮಕ್ಕಳಿದ್ದರು. 18ಇಚ್ಹಾರನ
ಚೊಚ್ಚಲಮಗನು ಶೆಲೋಮೋತ್.
19ಹೆಬ್ರೋನಿನ ಚೊಚ್ಚಲಮಗನು ಯೆರೀಯ. ಎರ
ಡನೆಯ ಮಗನು ಅಮರ್ಯ. ಯಹಜೀಯೇಲನು
ಮೂರನೆಯ ಮಗ. ಯೆಕಮ್ಮಾಮನು ನಾಲ್ಕನೆಯ ಮಗ.
20ಉಜ್ಜೀಯೇಲನ ಚೊಚ್ಚಲಮಗನು ಮೀಕ; ಇಷ್ಷೀ
ಯನು ಅವನ ಎರಡನೆಯ ಮಗ.

## ಮೆರಾರೀಯ ಕುಲದವರು

21ಮಹ್ಲೀ ಮತ್ತು ಮೂಷೀ ಮೆರಾರೀಯ ಗಂಡು
ಮಕ್ಕಳು. ಮಹ್ಲೀಯ ಮಕ್ಕಳು ಯಾರೆಂದರೆ: ಎಲ್ಲಾ
ಜಾರ್ ಮತ್ತು ಕೀಷ್. 22ಎಲ್ಲಾಜಾರನು ಗಂಡು
ಮಕ್ಕಳಿಲ್ಲದೆ ಸತ್ತನು. ಅವನಿಗೆ ಹೆಣ್ಣುಮಕ್ಕಳು ಮಾತ್ರವೇ
ಇದ್ದರು. ಇವರು ತಮ್ಮ ಸಂಬಂಧಿಕರಲ್ಲಿಯೇ ಮದುವೆ
ಯಾದರು. ಕೀಷನ ಗಂಡುಮಕ್ಕಳು ಅವರ ಸಂಬಂಧಿಕರಾ
ಗಿದ್ದರು. 23ಮೂಷಿಯ ಗಂಡುಮಕ್ಕಳು ಯಾರೆಂದರೆ:
ಮಹ್ಲೀ, ಏದೆರ್ ಮತ್ತು ಯೆರೇಮೋತ್. ಅವನಿಗೆ
ಮೂರು ಮಂದಿ ಗಂಡುಮಕ್ಕಳು.

## ಲೇವಿಯರ ಕೆಲಸ

24ಇವರೇ ಲೇವಿಯರ ಸಂತತಿಯವರು. ಇವರೇ
ಆಯಾ ಕುಟುಂಬಗಳ ಪ್ರಧಾನರು. ಇವರಲ್ಲಿ ಇಪ್ಪತ್ತು
ವರ್ಷ ಮೊದಲುಗೊಂಡು ಅದಕ್ಕಿಂತ ಮೇಲ್ಪಟ್ಟವರನ್ನು
ಮಾತ್ರ ಲೆಕ್ಕಿಸಲಾಯಿತು. ಅವರು ದೇವಾಲಯದಲ್ಲಿ
ಸೇವೆಮಾಡಿದರು.
25ದಾವೀದನು, “ಇಸ್ರೇಲರ ದೇವರಾದ ಯೆಹೋ
ವನು ತನ್ನ ಜನರಿಗೆ ಸಮಾಧಾನವನ್ನು ಅನುಗ್ರಹಿಸಿದ್ದಾನೆ.
ದೇವರು ನಿರಂತರವೂ ಜೆರುಸಲೇಮಿನಲ್ಲಿ ವಾಸಿಸಲು
ಬಂದಿರುತ್ತಾನೆ. 26ಆದುದರಿಂದ ಇನ್ನು ಮುಂದೆ ಲೇವಿ
ಯರಿಗೆ ದೇವದರ್ಶನಗುಡಾರವನ್ನಾಗಲೀ ಅದರ
ಸಾಮಾಗ್ರಿಗಳನ್ನಾಗಲೀ ಹೊರುವ ಅವಶ್ಯವಿಲ್ಲ” ಎಂದು
ಹೇಳಿದ್ದನು.
27ದಾವೀದನ ಕೊನೇ ಆಜ್ಞೆಯ ಪ್ರಕಾರ ಲೇವಿ ವಂಶದ
ವರಲ್ಲಿ ಇಪ್ಪತ್ತು ವರ್ಷ ಮೊದಲುಗೊಂಡು ಅದಕ್ಕಿಂತ
ಮೇಲ್ಪಟ್ಟವರನ್ನು ಲೆಕ್ಕಿಸಲಾಯಿತು.
28ಲೇವಿಯರು ಆರೋನನ ಸಂತತಿಯವರಾದ ಯಾಜ
ಕರಿಗೆ ದೇವಾಲಯದಲ್ಲಿ ಸೇವೆಮಾಡಲು ಸಹಾಯ
ಮಾಡುತ್ತಿದ್ದರು. ಇದಲ್ಲದೆ ಅವರು ದೇವಾಲಯದ
ಹೊರಗಿನ ಅಂಗಳವನ್ನೂ ದೇವಾಲಯದ ಎಡಬಲಗಡೆ

ಗಳಲ್ಲಿದ್ದ ಕೋಣೆಗಳನ್ನೂ ನೋಡಿಕೊಳ್ಳುತ್ತಿದ್ದರು;
ಪರಿಶುದ್ಧ ಸಾಮಾಗ್ರಿಗಳನ್ನು ಯಾವಾಗಲೂ ಶುದ್ಧವಾಗಿ
ಡುತ್ತಿದ್ದರು. ಹೀಗೆ ದೇವಾಲಯದ ಸೇವೆಯನ್ನು ಮಾಡು
ತ್ತಿದ್ದರು. 29ಮಾತ್ರವಲ್ಲದೆ ಅವರು ಗೋಧಿಹಿಟ್ಟನ್ನು
ಅಳೆದು ಹುಳಿಯಿಲ್ಲದ ರೊಟ್ಟಿಗಳನ್ನು ಮಾಡಿ ದೇವಾ
ಲಯದೊಳಗಿರುವ ಮೇಜಿನ ಮೇಲೆ ಇಡುತ್ತಿದ್ದರು.
30ಪ್ರತಿದಿನ ಮುಂಜಾನೆ ಮತ್ತು ಸಾಯಂಕಾಲ ದೇವಾ
ಲಯದೊಳಗೆ ಸ್ತುತಿಗೀತೆಗಳನ್ನು ಹಾಡಿ ದೇವರನ್ನು
ಮಹಿಮೆಪಡಿಸುತ್ತಿದ್ದರು. 31ಸಬ್ಬತ್‌ದಿನಗಳಲ್ಲಿಯೂ
ಅಮವಾಸ್ಯೆಗಳಲ್ಲಿಯೂ ಬೇರೆ ವಿಶೇಷ ದಿನಗಳಲ್ಲಿಯೂ
ದೇವರಿಗೆ ಸಮರ್ಪಿಸುವ ಸರ್ವಾಂಗಹೋಮವನ್ನು
ತಯಾರು ಮಾಡುತ್ತಿದ್ದರು. ಪ್ರತಿದಿನ ಎಷ್ಟು ಮಂದಿ
ಲೇವಿಯರು ಸೇವೆಮಾಡಬೇಕೆಂಬುದನ್ನು ಮೊದಲೇ
ಗೊತ್ತುಪಡಿಸಲಾಗಿತ್ತು. 32ಹೀಗೆ ಲೇವಿಯರು ತಾವು
ಮಾಡಬೇಕಾದ ಕೆಲಸಗಳನ್ನೆಲ್ಲಾ ಮಾಡಿದರು. ಅವರು
ಪವಿತ್ರಗುಡಾರವನ್ನು ಮತ್ತು ಪವಿತ್ರಸ್ಥಳವನ್ನು ನೋಡಿ
ಕೊಂಡರು; ತಮ್ಮ ಸಂಬಂಧಿಕರೂ ಆರೋನನ ಕುಲದ
ವರೂ ಆಗಿದ್ದ ಯಾಜಕರಿಗೆ ಸಹಾಯ ಮಾಡಿದರು.

### ಯಾಜಕರ ವರ್ಗಗಳು

24 ಆರೋನನ ಸಂತಾನದವರು ವರ್ಗಗಳಾಗಿ
ವಿಭಾಗಿಸಲ್ಪಟ್ಟರು. ಆರೋನನ ಗಂಡು
ಮಕ್ಕಳು: ನಾದಾಬ್, ಅಬೀಹೂ, ಎಲ್ಲಾಜಾರ್ ಮತ್ತು
ಈತಾಮಾರ್. 2ನಾದಾಬ್ ಮತ್ತು ಅಬೀಹೂ ತಮ್ಮ ತಂದೆ
ಸಾಯುವ ಮೊದಲೇ ತೀರಿಹೋದರು. ಅವರಿಗೆ
ಮಕ್ಕಳಿರಲಿಲ್ಲ. ಅವರ ಬದಲಿಗೆ ಎಲ್ಲಾಜಾರ್ ಮತ್ತು
ಈತಾಮಾರ್ ಯಾಜಕರಾಗಿ ಸೇವೆಮಾಡಿದರು. 3ಎಲ್ಲಾ
ಜಾರ್ ಮತ್ತು ಈತಾಮಾರ್‌ಕುಲದ ಯಾಜಕರನ್ನು
ದಾವೀದನು ಪ್ರತ್ಯೇಕಿಸಿ ಚಾದೋಕ್ ಮತ್ತು ಅಹೀ
ಮೆಲೆಕ್ ಯಾಜಕರ ಸಹಾಯದಿಂದ ಎರಡು ವರ್ಗ
ಗಳನ್ನಾಗಿ ಮಾಡಿದನು. ಚಾದೋಕನು ಎಲ್ಲಾಜಾರನ
ವಂಶದವನಾಗಿದ್ದನು ಮತ್ತು ಅಹೀಮೆಲೆಕನು ಈತಾ
ಮಾರನ ವಂಶದವನಾಗಿದ್ದನು. 4ಈತಾಮಾರನ ಸಂತತಿ
ಗಿಂತಲೂ ಎಲ್ಲಾಜಾರನ ಸಂತತಿಯವರಲ್ಲಿ ಹೆಚ್ಚು ಮಂದಿ
ನಾಯಕರಿದ್ದರು. ಎಲ್ಲಾಜಾರನ ಸಂತತಿಯವರಲ್ಲಿ ಹದಿ
ನಾರು ಮಂದಿ ಮತ್ತು ಈತಾಮಾರನ ಸಂತತಿಯವರಲ್ಲಿ
ಎಂಟು ಮಂದಿ ನಾಯಕರಿದ್ದರು. 5ಪ್ರತಿಯೊಂದು
ಕುಲದಿಂದ ಚೀಟುಹಾಕುವುದರ ಮೂಲಕ ಜನರನ್ನು
ಆರಿಸಿಕೊಳ್ಳಲಾಯಿತು. ಕೆಲವರನ್ನು ಪವಿತ್ರ ಸ್ಥಳದ ಸೇವೆ
ಗಾಗಿ ಆರಿಸಿಕೊಳ್ಳಲಾಯಿತು; ಇನ್ನು ಕೆಲವರನ್ನು ಯಾಜಕ
ರಾಗಿ ಸೇವೆಮಾಡಲು ಆರಿಸಿಕೊಳ್ಳಲಾಯಿತು; ಇವರೆ
ಲ್ಲರೂ ಎಲ್ಲಾಜಾರ್ ಮತ್ತು ಈತಾಮಾರನ ಕುಲದವ
ರಾಗಿದ್ದರು.

6ನೆತನೇಲನ ಮಗನಾದ ಶೆಮಾಯನು ಲೇಖಕ
ನಾಗಿದ್ದನು. ಶೆಮಾಯನು ಲೇವಿ ಸಂತತಿಗೆ ಸೇರಿದವನಾಗಿ
ದ್ದನು. ಇವನು ವಂಶಾವಳಿಯನ್ನು ಬರೆದಿಡುತ್ತಿದ್ದನು.
ಅರಸನಾದ ದಾವೀದನ ಮತ್ತು ಯಾಜಕರಾದ ಚಾದೋ
ಕನ, ಅಹೀಮೆಲೆಕನ ಮತ್ತು ಲೇವಿಯರ ನಾಯಕರ
ಎದುರಿನಲ್ಲಿ ಸಂತತಿಯವರನ್ನು ಬರೆದನು. ಪ್ರತಿಸಲ
ಚೀಟುಹಾಕಿ ಒಬ್ಬನನ್ನು ಒಂದು ಕೆಲಸಕ್ಕೆ ಆರಿಸಿದಾಗ
ಅವನ ಹೆಸರನ್ನು ವಂಶಾವಳಿಯಲ್ಲಿ ಬರೆದನು. ಹೀಗೆ
ಒಬ್ಬೊಬ್ಬನು ಯಾವಯಾವ ಕೆಲಸಗಳನ್ನು ಮಾಡ
ಬೇಕೆಂದು ಎಲ್ಲರಿಗೂ ಗೊತ್ತುಪಡಿಸಿದರು. ಈ ರೀತಿ
ಯಾಗಿ ಎಲ್ಲಾಜಾರ್ ಮತ್ತು ಈತಾಮಾರ್ ಕುಟುಂಬ
ದವರಿಗೆ ಯಾಜಕೋದ್ಯೋಗವನ್ನು ಮಾಡುವಂತೆ ವರ್ಗ
ಗಳಾಗಿ ಪ್ರತ್ಯೇಕಿಸಿ ಕೆಲಸಗಳನ್ನು ನೇಮಿಸಿದರು.

7 ಮೊದಲನೆಯ ವರ್ಗ ಯೆಹೋಯಾರೀಬನದು.
ಎರಡನೆಯ ವರ್ಗ ಯೆದಾಯನದು.
8 ಮೂರನೆಯ ವರ್ಗ ಹಾರೀಮನದು. ನಾಲ್ಕನೆಯ
ವರ್ಗ ಸೆಯೋರೀಮನದು.
9 ಐದನೆಯ ವರ್ಗ ಮಲ್ಕೀಯನದು. ಆರನೆಯ
ವರ್ಗ ಮಿಯ್ಯಾಮೀನನದು.
10 ಏಳನೆಯ ವರ್ಗ ಹಕ್ಕೋಚನದು. ಎಂಟನೆಯ
ವರ್ಗ ಅಬೀಯನದು.
11 ಒಂಭತ್ತನೆಯ ವರ್ಗ ಯೆಷೂವನದು. ಹತ್ತನೆಯ
ವರ್ಗ ಶೆಕನ್ಯನದು.
12 ಹನ್ನೊಂದನೆಯ ವರ್ಗ ಎಲ್ಯಾಷೀಬನದು. ಹನ್ನೆರ
ಡನೆಯ ವರ್ಗ ಯಾಕೀಮನದು.
13 ಹದಿಮೂರನೆಯ ವರ್ಗ ಹುಪ್ಪನದು. ಹದಿನಾಲ್ಕ
ನೆಯ ವರ್ಗ ಎಷೆಬಾಬನದು.
14 ಹದಿನೈದನೆಯ ವರ್ಗ ಬಿಲ್ಗನದು. ಹದಿನಾರನೆಯ
ವರ್ಗ ಇಮ್ಮೇರನದು.
15 ಹದಿನೇಳನೆಯ ವರ್ಗ ಹೇಜೀರನದು. ಹದಿನೆಂಟ
ನೆಯ ವರ್ಗ ಹಪ್ಪಿಚ್ಚೇಚನದು.
16 ಹತ್ತೊಂಭತ್ತನೆಯ ವರ್ಗ ಪೆತಹ್ಯನದು. ಇಪ್ಪತ್ತ
ನೆಯ ವರ್ಗ ಯೆಹೆಜ್ಕೇಲನದು.
17 ಇಪ್ಪತ್ತೊಂದನೆಯ ವರ್ಗ ಯಾಕೀನನದು. ಇಪ್ಪತ್ತೆ
ರಡನೆಯ ವರ್ಗ ಗಾಮೂಲನದು.
18 ಇಪ್ಪತ್ತಮೂರನೆಯ ವರ್ಗ ದೆಲಾಯನದು. ಇಪ್ಪತ್ತ
ನಾಲ್ಕಯನೆಯ ವರ್ಗ ಮಾಜ್ಯನದು.
19 ಈ ವರ್ಗದವರನ್ನು ಕ್ರಮವಾಗಿ ದೇವಾಲಯದಲ್ಲಿ
ಸೇವೆ ಮಾಡಲು ಆರಿಸಲಾಯಿತು. ಇವರು ಆರೋ
ನನ ಆರಾಧನಾ ಪದ್ಧತಿಯನ್ನು ಅನುಸರಿಸಿದರು.
ಇಸ್ರೇಲರ ದೇವರಾದ ಯೆಹೋವನು ಆರಾಧನಾ
ಕ್ರಮಗಳನ್ನು ಆರೋನನಿಗೆ ತಿಳಿಸಿದ್ದನು.

### ಇತರ ಲೇವಿಯರು

20ಲೇವಿಕುಲದ ಇತರ ಸಂತತಿಯವರು:

ಅಮ್ರಾಮನ ಸಂತತಿಯ ಶೂಬಾಯೇಲ. ಶೂಬಾ
ಯೇಲನ ಸಂತತಿಯ ಯೆಹ್ದೆಯಾಹ.
21 ರೆಹಬ್ಯನ ಸಂತತಿಯ ಇಷ್ಷೀಯ. (ಇಷ್ಷೀಯನು
ಚೊಚ್ಚಲ ಮಗನು.)
22 ಇಚ್ಹಾರನ ಸಂತತಿಯ ಶೆಲೋವೋತ್.
ಶೆಲೋಮೋತನ ಕುಟುಂಬದ ಯಹತ.
23 ಹೆಬ್ರೋನನ ಗಂಡುಮಕ್ಕಳು: ಮೊದಲನೆಯವನು
ಯೆರೀಯ; ಎರಡನೆಯ ಮಗ ಅಮರ್ಯ;
ಯಹಜೀಯೇಲನು ಮೂರನೆಯ ಮಗನು.
ನಾಲ್ಕನೆಯ ಮಗನು ಯೆಕಮ್ಮಾಮ.
24 ಉಜ್ಜೀಯೇಲನ ಮಗನು ಮೀಕ. ಮೀಕನ ಮಗ
ಶಾಮೀರ್.
25 ಇಷ್ಷೀಯನು ಮೀಕನ ಸೋದರ. ಇಷ್ಷೀಯನ
ಮಗ ಜೆಕರ್ಯ.
26 ಮೆರಾರೀಯ ಸಂತತಿಯ ಮಹ್ಲೀ, ಮೂಷೀ ಮತ್ತು
ಯಾಜ್ಯ.
27 ಯಾಜ್ಯನ ಗಂಡುಮಕ್ಕಳಾದ ಶೋಹಮ್,
ಜಕ್ಕೂರ್ ಮತ್ತು ಇಬ್ರೀ.
28 ಮಹ್ಲೀಯ ಮಗ ಎಲ್ಲಾಜಾರ್. ಎಲ್ಲಾಜಾರನಿಗೆ
ಗಂಡು ಮಕ್ಕಳಿರಲಿಲ್ಲ.
29 ಕೀಷನ ಮಗನಾದ ಯೆರಹ್ಮೇಲ.
30 ಮೂಷೀಯ ಗಂಡುಮಕ್ಕಳಾದ ಮಹ್ಲೀ, ಏದೆರ್
ಮತ್ತು ಯೆರೀಮೋತ್.

ಇವರೆಲ್ಲರು ಲೇವಿಕುಲದವರ ನಾಯಕರುಗಳು. ಇವರನ್ನು ಆಯಾ ಗೋತ್ರಗಳಿಗನುಸಾರವಾಗಿ ಪಟ್ಟಿ ಮಾಡಲಾಯಿತು.

31ಇವರನ್ನು ವಿಶಿಷ್ಟಕಾರ್ಯಗಳಿಗಾಗಿ ಚೀಟುಹಾಕಿ ಆರಿಸಲಾಯಿತು. ಆರೋನನ ಸಂತತಿಯವರೂ ಯಾಜಕರೂ ಆಗಿದ್ದ ತಮ್ಮ ಸಂಬಂಧಿಕರು ಮಾಡಿದಂತೆಯೇ ಚೀಟುಹಾಕಿ ವಿಶಿಷ್ಟಕಾರ್ಯಗಳಿಗಾಗಿ ಇವರನ್ನು ಆರಿಸಿಕೊಳ್ಳಲಾಯಿತು. ರಾಜನಾದ ದಾವೀದನ, ಚಾದೋಕನ, ಅಹೀಮೆಲೆಕನ ಮತ್ತು ಲೇವಿಕುಲದ ನಾಯಕರ ಎದುರಿಗೆ ಚೀಟುಹಾಕಿದರು. ಹಿರಿಯ ಅಥವಾ ಕಿರಿಯ ಕುಟುಂಬಗಳೆನ್ನದೆ ಎಲ್ಲರಿಗೂ ಸಮಾನವಾಗಿ ಕೆಲಸಗಳನ್ನು ಹಂಚಿದರು.

### ಗಾಯಕ ವೃಂದ

25 ದಾವೀದನೂ ಸೇನಾಪತಿಗಳೂ ಆಸಾಫನ ಸಂತ
ತಿಯವರನ್ನು ವಿಶೇಷವಾದ ಸೇವೆಗೆ ಪ್ರತ್ಯೇಕಿಸಿ
ದರು. ಆಸಾಫನ ಗಂಡುಮಕ್ಕಳು ಹೇಮಾನ್ ಮತ್ತು
ಯೆದುತೂನ್. ಹಾರ್ಪ್‌ವಾದ್ಯಗಳನ್ನು, ಲೈರ್‌ವಾದ್ಯಗ
ಳನ್ನು ಮತ್ತು ತಾಳಗಳನ್ನು ಬಾರಿಸುತ್ತಾ ದೇವರ ಸಂದೇಶ
ವನ್ನು ಪ್ರವಾದಿಸುವುದೇ ಇವರ ಸೇವೆಯಾಗಿತ್ತು. ಈ
ರೀತಿಯಾಗಿ ದೇವರ ಸೇವೆಯನ್ನು ಮಾಡಿದವರು
ಯಾರೆಂದರೆ:
2ಆಸಾಫನ ಸಂತತಿಯಲ್ಲಿ: ಜಕ್ಕೂರ, ಯೋಸೇಫ್,
ನೆತನ್ಯ ಮತ್ತು ಅಶರೇಲ. ಅರಸನಾದ ದಾವೀದನು
ನೇಮಿಸಿದ ಆಸಾಫನನ್ನು ಪ್ರವಾದಿಸುವುದಕ್ಕಾಗಿ ಆರಿಸಿ
ಕೊಂಡನು. ಆಸಾಫನು ತನ್ನ ಮಕ್ಕಳಿಗೂ ಮಾರ್ಗದರ್ಶನ
ನೀಡಿದನು. 3ಯೆದುತೂನನ ಸಂತತಿಯವರಲ್ಲಿ: ಗೆದಲ್ಯ,
ಜೇರಿ, ಯೆಶಾಯ, ಶಿಮ್ಮೀ, ಹಷಬ್ಯ ಮತ್ತು ಮತ್ತಿತ್ಯ.
ಒಟ್ಟು ಅವನ ಆರು ಮಂದಿ ಮಕ್ಕಳು ತಮ್ಮ ತಂದೆಯಾದ
ಯೆದುತೂನನೊಂದಿಗೆ ಹಾರ್ಪ್‌ವಾದ್ಯಗಳನ್ನು ಬಾರಿಸಿ
ದೇವರ ಸಂದೇಶವನ್ನು ತಿಳಿಸಿದರು ಮತ್ತು ದೇವರಿಗೆ
ಕೃತಜ್ಞತಾಸ್ತುತಿಯನ್ನು ಅರ್ಪಿಸಿದರು.
4ಹೇಮಾನನ ಸಂತತಿಯವರಲ್ಲಿ ಗಾಯನವೃಂದದಲ್ಲಿ
ಸೇವೆಮಾಡಿದವರು ಯಾರೆಂದರೆ: ಬುಕ್ಕೀಯ, ಮತ್ತನ್ಯ,
ಉಜ್ಜೀಯೇಲ್, ಶೂಬಾಯೇಲ್ ಮತ್ತು ಯೆರೀ
ಮೋತ; ಹನನ್ಯ, ಹನಾನೀ, ಎಲೀಯಾತ, ಗಿದ್ದಲ್ತಿ ಮತ್ತು
ರೋಮಮ್ತಿ ಯೆಜೆರ್; ಯೊಷ್ಬೆಕಾಷ, ಮಲ್ಲೋತೀ,
ಹೋತೀರ್ ಮತ್ತು ಮಹಜೀಯೋತ್. 5ಇವರೆಲ್ಲರೂ
ಹೇಮಾನನ ಮಕ್ಕಳು. ಹೇಮಾನನು ದಾವೀದನ ಪ್ರವಾದಿ
ಯಾಗಿದ್ದನು. ಅವನನ್ನು ಬಲಿಷ್ಠನನ್ನಾಗಿ ಮಾಡುವುದಾಗಿ
ದೇವರು ವಾಗ್ದಾನ ಮಾಡಿದ್ದನು. ಆದುದರಿಂದ ಅವನಿಗೆ
ಹದಿನಾಲ್ಕು ಮಂದಿ ಗಂಡುಮಕ್ಕಳೂ ಮೂವರು ಹೆಣ್ಣು
ಮಕ್ಕಳೂ ಹುಟ್ಟಿದರು. 6ಹೇಮಾನನು ತನ್ನ ಮಕ್ಕಳೆ
ಲ್ಲರನ್ನು ದೇವಾಲಯದಲ್ಲಿ ಹಾಡುವದಕ್ಕಾಗಿ ಬಳಸಿ
ಕೊಂಡನು. ಅವರು ಹಾರ್ಪ್ ಮತ್ತು ಲೈರ್ ವಾದ್ಯ
ಗಳನ್ನೂ ತಾಳಗಳನ್ನೂ ಬಾರಿಸಿದರು. ಹೀಗೆ ದೇವಾಲಯ
ದಲ್ಲಿ ಸೇವೆಮಾಡುವುದಕ್ಕಾಗಿ ಅರಸನಾದ ದಾವೀದನು
ಅವರನ್ನು ಆರಿಸಿಕೊಂಡನು. 7ಅವರೂ ಅವರ ಸಂಬಂಧಿ
ಕರೂ ಹಾಡುಗಳನ್ನು ಹಾಡಲು ತರಬೇತಿ ಹೊಂದಿದವ
ರಾಗಿದ್ದರು. ಒಟ್ಟು ಇನ್ನೂರ ಎಂಭತ್ತೆಂಟು ಮಂದಿ
ಗಾಯಕರು ದೇವರಿಗೆ ಸ್ತುತಿಗೀತೆ ಹಾಡಲು ತರಬೇತಿ
ಹೊಂದಿದವರಾಗಿದ್ದರು. 8ಪ್ರತಿಯೊಬ್ಬರಿಗೂ ಕೆಲಸ
ಗಳನ್ನು ಗೊತ್ತುಪಡಿಸಲು ಚೀಟುಹಾಕಿ ನೇಮಕ ಮಾಡಿ
ದರು. ಅವರು ಯಾವ ಪಕ್ಷಪಾತವನ್ನೂ ಮಾಡಲಿಲ್ಲ.
ದೊಡ್ಡವರು, ಚಿಕ್ಕವರು, ಉಪಾಧ್ಯಾಯರು, ವಿದ್ಯಾರ್ಥಿ
ಗಳು ಎಂಬ ಬೇಧಭಾವವಿಲ್ಲದೆ ಆರಿಸಲ್ಪಟ್ಟರು.
9ಮೊದಲನೆಯದಾಗಿ, ಆಸಾಫ್ಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
ಎರಡನೆಯದಾಗಿ, ಗೆದಲ್ಯನ ಗಂಡುಮಕ್ಕಳಲ್ಲಿ ಮತ್ತು
ಸಂಬಂಧಿಕರಲ್ಲಿ ಹನ್ನೆರಡು ಮಂದಿ.

10ಮೂರನೆಯದಾಗಿ ಜಕ್ಕೂರನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
11ನಾಲ್ಕನೆಯದಾಗಿ ಇಚ್ರೀಯ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
12ಐದನೆಯದಾಗಿ ನೆತನ್ಯನ ಗಂಡುಮಕ್ಕಳಲ್ಲಿ ಮತ್ತು
ಸಂಬಂಧಿಕರಲ್ಲಿ ಹನ್ನೆರಡು ಮಂದಿ.
13ಆರನೆಯದಾಗಿ ಬುಕ್ಕೀಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
14ಏಳನೆಯದಾಗಿ ಯೆಸರೇಲನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
15ಎಂಟನೆಯದಾಗಿ ಯೆಶಾಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
16ಒಂಭತ್ತನೆಯದಾಗಿ ಮತ್ತನ್ಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
17ಹತ್ತನೆಯದಾಗಿ ಶಿಮ್ಮೀಯನ ಗಂಡುಮಕ್ಕಳಲ್ಲಿ
ಮತ್ತು ಅವನ ಸಂಬಂಧಿಕರಲ್ಲಿ ಹನ್ನೆರಡು ಮಂದಿ.
18ಹನ್ನೊಂದನೆಯದಾಗಿ ಅಜರೇಲನ ಗಂಡುಮಕ್ಕಳಲ್ಲಿ
ಮತ್ತು ಅವನ ಸಂಬಂಧಿಕರಲ್ಲಿ ಹನ್ನೆರಡು ಮಂದಿ.
19 ಹನ್ನೆರಡನೆಯದಾಗಿ ಹಷಬ್ಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
20ಹದಿಮೂರನೆಯದಾಗಿ ಶೂಬಾಯೇಲನ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
21ಹದಿನಾಲ್ಕನೆಯದಾಗಿ ಮತ್ತಿತ್ಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
22ಹದಿನೈದನೆಯದಾಗಿ ಯೆರೆಮೋತನ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
23ಹದಿನಾರನೆಯದಾಗಿ ಹನನ್ಯನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
24ಹದಿನೇಳನೆಯದಾಗಿ ಯೊಷ್ಬೆಕಾಷನ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
25ಹದಿನೆಂಟನೆಯದಾಗಿ ಹನಾನೀಯ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
26ಹತ್ತೊಂಭತ್ತನೆಯದಾಗಿ ಮಲ್ಲೋತಿಯ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
27ಇಪ್ಪತ್ತನೆಯದಾಗಿ ಎಲೀಯಾತನ ಗಂಡುಮಕ್ಕಳಲ್ಲಿ
ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
28ಇಪ್ಪತ್ತೊಂದನೆಯದಾಗಿ, ಹೋತೀರನ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
29ಇಪ್ಪತ್ತೆರಡನೆಯದಾಗಿ ಗಿದ್ದಲ್ತಿಯನ ಗಂಡು
ಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು ಮಂದಿ.
30ಇಪ್ಪತ್ತ ಮೂರನೆಯದಾಗಿ ಮಹಜೀಯೋತನ
ಗಂಡುಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು
ಮಂದಿ.
31ಇಪ್ಪತ್ತನಾಲ್ಕನೆಯದಾಗಿ ರೋಮಮ್ತಿಯೆಜೆರನ
ಗಂಡುಮಕ್ಕಳಲ್ಲಿ ಮತ್ತು ಸಂಬಂಧಿಕರಲ್ಲಿ ಹನ್ನೆರಡು
ಮಂದಿ.

## ದ್ವಾರಪಾಲಕರ ವರ್ಗಗಳು

26 ಕೋರಹಿಯ ವಂಶದವರಲ್ಲಿ ದ್ವಾರಪಾಲಕರು
ಯಾರೆಂದರೆ: ಮೆಷೆಲೆಮ್ಯ ಮತ್ತು ಅವನ
ಗಂಡುಮಕ್ಕಳು. (ಮೆಷೆಲೆಮ್ಯನು ಕೋರಹಿಯನ ಮಗ.
ಕೋರಹಿಯನು ಆಸಾಫನ ಕುಲದವನಾಗಿದ್ದನು.)
2ಜೆಕರ್ಯನು ಮೆಷೆಲೆಮ್ಯನ ಮೊದಲನೆಯ ಮಗ;
ಎದೀಯಯೇಲನು ಎರಡನೆಯ ಮಗ; ಜೆಬದ್ಯನು
ಮೂರನೆಯ ಮಗ; ಯತ್ನಿಯೇಲನು ನಾಲ್ಕನೆಯ ಮಗ;
3ಏಲಾಮನು ಐದನೆಯ ಮಗ; ಯೆಹೋಹಾನನು
ಆರನೆಯ ಮಗ; ಮತ್ತು ಎಲ್ಯೆಹೋಯೇನೈ ಏಳನೆಯ
ಮಗ.
4ಓಬೇದೆದೋಮ್ ಮತ್ತು ಅವನ ಮಕ್ಕಳು: ಶೆಮಾ
ಯನು ಚೊಚ್ಚಲಮಗ; ಎರಡನೆಯವನು ಯೆಹೋಜಾ
ಬಾದ್; ಮೂರನೆಯವನು ಯೋವಾಹ, ನಾಲ್ಕನೆಯ
ವನು ಸಾಕಾರ್, ಐದನೆಯವನು ನೆತನೇಲ್; 5ಆರನೆಯ
ವನು ಅಮ್ಮೀಯೇಲ; ಏಳನೆಯವನು ಇಸ್ಸಾಕಾರ್;
ಎಂಟನೆಯವನು ಪೆಯುಲ್ಲೆತೈ. ದೇವರು ಓಬೇದೆದೋ
ಮನನ್ನು ಅತಿಯಾಗಿ ಆಶೀರ್ವದಿಸಿದನು. 6ಶೆಮಾಯ
ನಿಗೂ ಗಂಡುಮಕ್ಕಳಿದ್ದರು. ಅವರು ಧೈರ್ಯಶಾಲಿಗಳೂ
ಬಲಶಾಲಿಗಳೂ ಆಗಿದ್ದದರಿಂದ ತಂದೆಯ ಕುಲದಲ್ಲಿ
ನಾಯಕರಾಗಿದ್ದರು. 7ಶೆಮಾಯನ ಮಕ್ಕಳು ಯಾರೆಂ
ದರೆ; ಒತ್ನೀ, ರೆಫಾಯೇಲ್, ಓಬೇದ್, ಎಲ್ಜಾಬಾದ್,
ಎಲೀಹು, ಮತ್ತು ಸಮಕ್ಯ. ಎಲ್ಜಾಬಾದನ ಸಂಬಂಧಿಕರು
ಕುಶಲಕರ್ಮಿಗಳು. 8ಈ ಎಲ್ಲಾ ಜನರೂ ಓಬೇದೆದೋ
ಮನ ಸಂತತಿಯವರು. ಇವರೆಲ್ಲಾ ಬಲಶಾಲಿಗಳಾಗಿ
ದ್ದರು. ಒಳ್ಳೆಯ ಅನುಭವಸ್ತ ದ್ವಾರಪಾಲಕರಾಗಿದ್ದರು.
ಓಬೇದೆದೋಮನ ಸಂತತಿಯವರ ಒಟ್ಟು ಸಂಖ್ಯೆ
ಅರವತ್ತೆರಡು ಮಂದಿ.
9ಮೆಷೆಲೆಮ್ಯನ ಗಂಡುಮಕ್ಕಳು ಮತ್ತು ಸಂಬಂಧಿಕರು
ಬಲಾಢ್ಯರಾಗಿದ್ದರು. ಅವನಿಗೆ ಒಟ್ಟು ಹದಿನೆಂಟು ಗಂಡು
ಮಕ್ಕಳು ಮತ್ತು ಸಂಬಂಧಿಕರು ಇದ್ದರು.
10ಮೆರಾರೀ ಕುಲದವರ ದ್ವಾರಪಾಲಕರು ಯಾರೆಂ
ದರೆ: ಹೋಸ ಮತ್ತು ಅವನ ಗಂಡುಮಕ್ಕಳಲ್ಲಿ ಆರಿಸಲ್ಪಟ್ಟ
ಶಿಮ್ರಿ. (ಇವನು ಚೊಚ್ಚಲ ಮಗನಲ್ಲದಿದ್ದರೂ ತಂದೆಯು
ಅವನನ್ನು ಪ್ರಧಾನನ್ನಾಗಿ ಆರಿಸಿದನು.)
11ಅವನ ಎರಡನೆಯ ಮಗನು ಹಿಲ್ಕೀಯ; ಮೂರನೆ
ಯವನು ಟೆಬಲ್ಯ. ನಾಲ್ಕನೆಯ ಮಗನು ಜೆಕರ್ಯ. ಹೀಗೆ
ಒಟ್ಟು ಅವನಿಗೆ ಹದಿಮೂರು ಗಂಡುಮಕ್ಕಳೂ
ಸಂಬಂಧಿಕರೂ ಇದ್ದರು.

12ಇವರೆಲ್ಲಾ ದೇವಾಲಯದ ದ್ವಾರಪಾಲಕರಾಗಿದ್ದರು.
ಅದರಲ್ಲಿ ಸೇವೆಮಾಡುತ್ತಿರುವ ಇತರರಂತೆಯೇ ಇವರೂ
ದೇವಾಲಯದ ದ್ವಾರಗಳನ್ನು ಕಾಯುತ್ತಿದ್ದರು. 13ಪ್ರತಿ
ಯೊಂದು ಕುಟುಂಬಕ್ಕೆ ಒಂದೊಂದು ದ್ವಾರದ ಜವಾ
ಬ್ದಾರಿಕೆಯನ್ನು ಚೀಟುಹಾಕಿ ಕೊಡಲಾಯಿತು.

14ಶೆಲೆಮ್ಯನಿಗೆ ಪೂರ್ವದಿಕ್ಕಿನ ಬಾಗಿಲನ್ನು ಕಾಯುವ
ಜವಾಬ್ದಾರಿ ದೊರೆಯಿತು; ಅವನ ಮಗನಾದ
ಜೆಕರ್ಯನಿಗೆ ಉತ್ತರದಿಕ್ಕಿನ ಬಾಗಿಲನ್ನು ಕಾಯುವ ಜವಾ
ಬ್ದಾರಿ ದೊರೆಯಿತು. ಇವನು ಒಳ್ಳೆಯ ಸಲಹೆ
ಗಾರನಾಗಿದ್ದನು. 15ಓಬೇದೆದೋಮನಿಗೆ ದಕ್ಷಿಣದಿಕ್ಕಿನ
ಬಾಗಲನ್ನು ಕಾಯುವ ಜವಾಬ್ದಾರಿ ದೊರೆಯಿತು. ಇವನ
ಮಕ್ಕಳಿಗೆ ಬೆಲೆಬಾಳುವ ಸಾಮಾಗ್ರಿಗಳ ಉಗ್ರಾಣದ
ಕೋಣೆಯನ್ನು ಕಾಯುವ ಕೆಲಸ ದೊರೆಯಿತು.
16ಶುಪ್ಪೀಮ್ ಮತ್ತು ಹೋಸ ಎಂಬವರಿಗೆ ಪಶ್ಚಿಮದ
ಬಾಗಿಲನ್ನು ಮತ್ತು ಮೇಲ್ದಾರಿಯಲ್ಲಿದ್ದ ಶೆಲ್ಲೆಕೆತ್
ಬಾಗಿಲನ್ನು ಕಾಯುವ ಕೆಲಸ ದೊರೆಯಿತು.

ಕಾವಲುಗಾರರು ಪಕ್ಕಪಕ್ಕದಲ್ಲಿಯೇ ನಿಂತುಕೊಳ್ಳುತ್ತಿ
ದ್ದರು. 17ಪ್ರತಿದಿನ ಪೂರ್ವದಿಕ್ಕಿನ ಬಾಗಿಲಿನಲ್ಲಿ ಆರು
ಮಂದಿ ಲೇವಿಯರು ಕಾವಲಿಗಿದ್ದರು; ಉತ್ತರದಿಕ್ಕಿನ
ಬಾಗಿಲಿನಲ್ಲಿ ಪ್ರತಿದಿನ ನಾಲ್ಕು ಮಂದಿ ಲೇವಿಯರು
ಕಾವಲಿಗಿದ್ದರು; ದಕ್ಷಿಣದ ಬಾಗಿಲಿನಲ್ಲಿ ನಾಲ್ಕು ಮಂದಿ
ಲೇವಿಯರು ಕಾವಲಿಗಿದ್ದರು; ಇಬ್ಬರು ಲೇವಿಯರು ಬೆಲೆ
ಬಾಳುವ ವಸ್ತುಗಳ ಕೋಣೆಗೆ ಕಾವಲಾಗಿದ್ದರು.
18ಪಶ್ಚಿಮದ ಅಂಗಳದಲ್ಲಿ ನಾಲ್ಕು ಮಂದಿ ಕಾವಲು
ಗಾರರಿದ್ದರು.

19ಅಂಗಳಕ್ಕೆ ಹೋಗುವ ದಾರಿಯನ್ನು ಕಾಯಲು
ಇಬ್ಬರು ಕಾವಲುಗಾರರಿದ್ದರು. ಹೀಗೆ ಇವರೆಲ್ಲಾ ದ್ವಾರ
ಪಾಲಕರ ತಂಡಗಳು. ಇವರು ಕೋರಹ ಮತ್ತು ಮೆರಾ
ರೀಯ ವಂಶದವರು.

### ಖಜಾಂಚಿಗಳು ಮತ್ತು ಇತರ ಅಧಿಕಾರಿಗಳು

20ಅಹೀಯನು ಲೇವಿ ಕುಲದವನಾಗಿದ್ದನು. ಇವನು
ದೇವಾಲಯದ ಬೆಲೆಬಾಳುವ ವಸ್ತುಗಳ ಅಧಿಕಾರಿಯಾಗಿ
ದ್ದನು. ಅಲ್ಲದೆ ಪವಿತ್ರ ಸಾಮಾಗ್ರಿಗಳನ್ನು ಇಡುವ ಸ್ಥಳದ
ಮೇಲೆಯೂ ಇವನು ಅಧಿಕಾರಿಯಾಗಿದ್ದನು.

21ಲದ್ದಾನ್ಯನು ಗೇರ್ಷೋಮ್ ಕುಲದವನಾಗಿದ್ದನು.
ಯೆಹೀಯೇಲೀಯು ಲದ್ದಾನ್ ಕುಲದ ನಾಯಕರಲ್ಲೊ
ಬ್ಬನು. 22ಯೆಹೀಯೇಲೀಯ ಗಂಡುಮಕ್ಕಳು:
ಜೇತಾಮ್ ಮತ್ತು ಅವನ ತಮ್ಮನಾದ ಯೋವೇಲ.
ಇವರು ಸಹ ದೇವಾಲಯದ ಬೆಲೆಬಾಳುವ ವಸ್ತುಗಳ
ಅಧಿಕಾರಿಗಳಾಗಿದ್ದರು.

23ಇವರಲ್ಲದೆ ಅಮ್ರಾಮ್, ಇಚ್ಹಾರ್, ಹೆಬ್ರೋನ್,
ಮತ್ತು ಉಜ್ಜೀಯೇಲ್ ಇವರ ಕುಲಗಳಿಂದ ಬೇರೆ
ನಾಯಕರನ್ನು ಆರಿಸಿಕೊಂಡರು. 24ಶೆಬೂವೇಲನು
ದೇವಾಲಯದ ಅಮೂಲ್ಯವಸ್ತುಗಳಿಗೆ ಅಧಿಕಾರಿಯಾಗಿ
ದ್ದನು. ಇವನು ಗೇರ್ಷೋಮನ ಮಗ. ಗೇರ್ಷೋಮನು
ಮೋಶೆಯ ಮಗ. 25ಶೆಬೂವೇಲನ ಸಂಬಂಧಿಕರು
ಯಾರೆಂದರೆ: ಎಲೀಯೆಜೆರನ ಮಗನಾದ ರೆಹಬ್ಯ;
ರೆಹಬ್ಯನ ಮಗನಾದ ಯೆತಾಯ; ಯೆತಾಯನ ಮಗನಾದ
ಯೋರಾಮ್; ಯೋರಾಮನ ಮಗನಾದ ಜಿಕ್ರೀ; ಮತ್ತು
ಜಿಕ್ರೀಯ ಮಗನಾದ ಶೆಲೋಮೋತ್. 26ದಾವೀದನು
ದೇವಾಲಯಕ್ಕೋಸ್ಕರ ಸಂಗ್ರಹಿಸಿದ ಎಲ್ಲಾ ವಸ್ತುಗಳಿಗೆ
ಶೆಲೋಮೋತನೂ ಅವನ ಸಂಬಂಧಿಕರೂ ಅಧಿಕಾರಿ
ಗಳಾಗಿದ್ದರು.

ಸೈನ್ಯಾಧಿಕಾರಿಗಳು ದೇವಾಲಯವನ್ನು ಕಟ್ಟಲು
ಸಾಮಾಗ್ರಿಗಳನ್ನು ಒದಗಿಸಿದರು. 27ಯುದ್ಧದಲ್ಲಿ ಗೆದ್ದ
ವಸ್ತುಗಳಲ್ಲಿ ಕೆಲವನ್ನು ದೇವಾಲಯ ಕಟ್ಟಲು ಎತ್ತಿಡಲು
ತೀರ್ಮಾನಿಸಿದರು.

28ಶೆಲೋಮೋತ್ ಮತ್ತು ಅವನ ಸಂಬಂಧಿಕರೂ
ಪ್ರವಾದಿಯಾದ ಸಮುವೇಲನೂ ಕೀಷನ ಮಗನಾದ
ಸೌಲನೂ ನೇರನ ಮಗನಾದ ಅಬ್ನೇರನೂ ಚೆರೂಯಳ
ಮಗನಾದ ಯೋವಾಬನೂ ದೇವರಿಗೆಂದು ಕೊಟ್ಟಿದ್ದ
ಪವಿತ್ರವಸ್ತುಗಳ ಮೇಲ್ವಿಚಾರಕರಾಗಿದ್ದರು.

29ಕೆನನ್ಯನು ಇಚ್ಹಾರ್ಯ ವಂಶದವನಾಗಿದ್ದನು.
ಕೆನನ್ಯನೂ ಅವನ ಮಕ್ಕಳೂ ನ್ಯಾಯಾಧೀಶರಾಗಿಯೂ
ಕಾನೂನುಪಾಲಕರಾಗಿಯೂ ಇಸ್ರೇಲಿನ ಅನೇಕ
ಕಡೆಗಳಲ್ಲಿ ಕೆಲಸಮಾಡಿದರು. 30ಹಷಬ್ಯನು ಹೆಬ್ರೋನ್
ಸಂತಾನದವನಾಗಿದ್ದನು. ಇವನೂ ಇವನ ಸಂಬಂಧಿಕರೂ
ಜೋರ್ಡನ್ ನದಿಯ ಪಶ್ಚಿಮ ಪ್ರಾಂತ್ಯದಲ್ಲಿ ಯೆಹೋ
ವನ ಸೇವೆಗೂ ಅರಸನ ಕಾರ್ಯಕ್ಕೂ ಅಧಿಕಾರಿಗಳಾ
ಗಿದ್ದರು. ಹಷಬ್ಯನ ವರ್ಗದಲ್ಲಿ ಒಟ್ಟು ಒಂದು ಸಾವಿರದ
ಏಳುನೂರು ಮಂದಿ ಸಾಮರ್ಥ್ಯಶಾಲಿಗಳಿದ್ದರು.
31ಹೆಬ್ರೋನ್ ಸಂತಾನದ ಚರಿತ್ರೆಗನುಸಾರವಾಗಿ ಯೆರೀ
ಯನು ಅವರ ಅಧಿಪತಿಯಾಗಿದ್ದನು. ದಾವೀದನು ನಲ
ವತ್ತು ವರುಷ ಇಸ್ರೇಲಿನ ಅರಸನಾಗಿದ್ದ ಕಾಲದಲ್ಲಿ ತನ್ನ
ಜನರ ಚರಿತ್ರೆಯನ್ನು ಕಂಡುಹಿಡಿದು ದಾಖಲೆ ಮಾಡಲು
ಆಜ್ಞೆಯಿತ್ತಿದ್ದನು. ಗಿಲ್ಯಾದಿನ ಯಾಜೇರ್ ಎಂಬಲ್ಲಿ
ಹೆಬ್ರೋನ್ ಸಂತಾನಕ್ಕೆ ಸೇರಿದವರಲ್ಲಿ ಬಹಳ ಮಂದಿ
ಅನುಭವಶಾಲಿಗಳಾದ ಕಾರ್ಮಿಕರು ದೊರಕಿದರು.
32ಯೆರೀಯನಿಗೆ ಎರಡು ಸಾವಿರದ ಏಳುನೂರು ಮಂದಿ
ಸಂಬಂಧಿಕರಿದ್ದರು. ಇವರೆಲ್ಲಾ ಬಲಾಢ್ಯರೂ ಕುಟುಂ
ಬಕ್ಕೆ ನಾಯಕರುಗಳೂ ಆಗಿದ್ದರು. ದಾವೀದನು ಇವರೆಲ್ಲ
ರಿಗೂ ರೂಬೇನ್, ಗಾದ್, ಅರ್ಧಮನಸ್ಸೆಯವರ
ಪ್ರಾಂತ್ಯಗಳಲ್ಲಿ ಯೆಹೋವನಿಗೆ ಸಂಬಂಧಿಸಿದ ಕಾರ್ಯ
ಗಳನ್ನು ರಾಜನಿಗೆ ಸಂಬಂಧಿಸಿದ ಕಾರ್ಯಗಳನ್ನು
ಮಾಡಲು ನೇಮಕ ಮಾಡಿದನು.

## ಸೈನಿಕ ತಂಡಗಳು

27 ಅರಸನ ಸೈನ್ಯದಲ್ಲಿ ಸೇವೆಮಾಡಿದವರ ಪಟ್ಟಿ.
ಒಂದೊಂದು ತಂಡದವರು, ಇಸ್ರೇಲಿನ ಸೈನ್ಯಾ
ದಿಕಾರಿಗಳು ಸಹಸ್ರಾಧಿಪತಿಗಳು ಮತ್ತು ಇತರ ಅಧಿಕಾರಿ
ಗಳು ವರ್ಷದ ಆಯಾ ತಿಂಗಳಲ್ಲಿ ತಮ್ಮ ತಂಡದ ಸರದಿಯ
ಪ್ರಕಾರ ಅರಸನ ವಿವಿಧ ಸೇವೆಮಾಡುತ್ತಿದ್ದರು. ಸೈನ್ಯದ
ಪ್ರತಿಯೊಂದು ತಂಡದಲ್ಲಿ ಇಪ್ಪತ್ನಾಲ್ಕು ಸಾವಿರ
ಪುರುಷರಿದ್ದರು.

2ಮೊದಲನೆಯ ತಿಂಗಳಲ್ಲಿ ಕಾರ್ಯಾಚರಣೆಯಲ್ಲಿರ
ಬೇಕಾದ ತಂಡಕ್ಕೆ ಯಾಷೊಬ್ಬಾಮನು ಮುಖ್ಯಸ್ತನಾಗಿ
ದ್ದನು. ಇವನು ಜಬ್ದೀಯೇಲನ ಮಗನಾಗಿದ್ದನು. ಇವನ
ಕೈಕೆಳಗೆ ಇಪ್ಪತ್ತನಾಲ್ಕು ಸಾವಿರ ಮಂದಿ ಇದ್ದರು.
3ಯಾಷೊಬ್ಬಾಮನು ಪೆರೆಚನ ಸಂತತಿಯವನಾಗಿದ್ದನು.
ಇವನು ವರ್ಷದ ಮೊದಲನೆಯ ತಿಂಗಳಲ್ಲಿ ಸೇವೆಮಾಡುವ
ಸೈನ್ಯಾಧಿಕಾರಿಯಾಗಿದ್ದನು.

4ಎರಡನೆಯ ತಿಂಗಳಿನ ಸೈನ್ಯಾಧಿಕಾರಿ ಅಹೋಹೀಯ
ನಾದ ಮೋದೈ. ಒಟ್ಟು ಇಪ್ಪತ್ತನಾಲ್ಕು ಸಾವಿರ ಮಂದಿ
ಅವನ ತಂಡದಲ್ಲಿದ್ದರು.

5ಮೂರನೆಯ ಸೈನ್ಯಾಧಿಪತಿಯು ಬೆನಾಯ. ಇವನು
ಯೆಹೋಯಾದನ ಮಗನಾಗಿದ್ದನು. ಇವನು ಮಹಾ
ಯಾಜಕನಾಗಿದ್ದನು. ಇವನೊಂದಿಗೆ ಇಪ್ಪತ್ತನಾಲ್ಕು
ಸಾವಿರ ಮಂದಿ ಕಾಲಾಳುಗಳು ಇದ್ದರು. 6ಮೂವತ್ತು
ವೀರರಲ್ಲಿ ಒಬ್ಬನಾದ ಬೆನಾಯನೇ ಇವನು. ಬೆನಾಯನು
ಅವರ ನಾಯಕನಾಗಿದ್ದನು. ಬೆನಾಯನ ಮಗ ಅಮ್ಮೀ
ಜಾಬಾದನು ಬೆನಾಯನ ತಂಡದ ಅಧಿಪತಿಯಾಗಿದ್ದನು.

7ನಾಲ್ಕನೆಯ ಸೇನಾಪತಿಯು ಅಸಾಹೇಲ. ಇವನು
ವರುಷದ ನಾಲ್ಕನೆಯ ತಿಂಗಳಿನಲ್ಲಿ ರಾಜ್ಯದ ಸೈನ್ಯದ
ಅಧಿಪತಿಯಾಗಿದ್ದನು. ಇವನು ಯೋವಾಬನ ಸೋದರ.
ಇವನ ನಂತರ ಅಸಾಹೇಲನ ಮಗನಾದ ಜೆಬದ್ಯನು
ಸೈನ್ಯಾಧಿಕಾರಿಯಾದನು. ಅಸಾಹೇಲನ ತಂಡದಲ್ಲಿ ಇಪ್ಪತ್ತ
ನಾಲ್ಕು ಸಾವಿರ ಮಂದಿ ಇದ್ದರು. 8ಐದನೆಯ ಸೈನ್ಯಾಧಿ
ಕಾರಿಯು ಶಮ್ಹೂತ. ಇವನು ಇಜ್ರಾಹ್ಯನ ಸಂತತಿಯವ
ನಾಗಿದ್ದನು. ವರುಷದ ಐದನೆಯ ತಿಂಗಳಿನ ಸೈನ್ಯದ
ಮುಖ್ಯಾಧಿಕಾರಿಯಾಗಿದ್ದನು. ಇವನ ಕೈಕೆಳಗೆ ಇಪ್ಪತ್ತ
ನಾಲ್ಕು ಸಾವಿರ ಮಂದಿ ಸೈನಿಕರಿದ್ದರು.

9ಆರನೆಯ ಸೈನ್ಯಾಧಿಪತಿಯು ಈರನು. ಇವನು ವರು
ಷದ ಆರನೆಯ ತಿಂಗಳಲ್ಲಿ ಸೈನ್ಯಾಧಿಕಾರಿಯಾಗಿದ್ದನು.
ಇವನು ತೆಕೋವದ ಇಕ್ಕೇಷನ ಮಗ. ಇವನ ಕೈಕೆಳಗೆ
ಇಪ್ಪತ್ತನಾಲ್ಕು ಸಾವಿರ ಮಂದಿ ಸೈನಿಕರಿದ್ದರು. 10ಹೆಲೆಚನು
ಏಳನೆಯ ಸೈನ್ಯಾಧಿಕಾರಿ. ವರುಷದ ಏಳನೆಯ ತಿಂಗಳಲ್ಲಿ
ಇವನು ಸೈನ್ಯಾಧಿಕಾರಿಯಾಗಿದ್ದನು. ಇವನು ಎಫ್ರಾ
ಯೀಮ್ ಸಂತತಿಯ ಪೆಲೋನ್ಯನಾಗಿದ್ದನು. ಇವನ
ತಂಡದಲ್ಲಿ ಇಪ್ಪತ್ತನಾಲ್ಕು ಸಾವಿರ ಮಂದಿ ಸೈನಿಕರಿದ್ದರು.

11ಎಂಟನೆಯ ಸೇನಾಧಿಪತಿಯ ಹೆಸರು ಸಿಬ್ಬಕೈ. ಇವನು
ಹುಷ ಊರಿನ ಜೆರಹನ ಸಂತತಿಯವನು. ವರುಷದ
ಎಂಟನೆಯ ತಿಂಗಳಿನ ಸೇನಾಧಿಪತಿ. ಇವನ ಕೈ ಕೆಳಗೆ
ಇಪ್ಪತ್ತನಾಲ್ಕು ಸಾವಿರ ಮಂದಿ ಸೈನಿಕರಿದ್ದರು.

12ಒಂಭತ್ತನೆಯ ಸೇನಾಪತಿ ಅಬೀಯೆಜೆರ್. ಇವನು
ಅನತೋತ್ ಊರಿನ ಬೆನ್ಯಾಮೀನ್ ಕುಲದವನು. ವರು
ಷದ ಒಂಭತ್ತನೆಯ ತಿಂಗಳಲ್ಲಿ ಸೈನ್ಯಾಧಿಕಾರಿಯಾಗಿದ್ದನು.
ಇವನ ಕೈಕೆಳಗೆ ಇಪ್ಪತ್ತನಾಲ್ಕು ಸಾವಿರ ಮಂದಿ
ಸೈನಿಕರಿದ್ದರು.

13ಹತ್ತನೆಯ ಸೇನಾಪತಿ ಮಹರೈ. ಇವನು ನೆಟೋಫದ
ಜೆರಹನ ಸಂತತಿಯವನು. ವರುಷದ ಹತ್ತನೆಯ ತಿಂಗಳಿಗೆ
ಇವನು ಸೈನ್ಯಾಧಿಕಾರಿಯಾಗಿದ್ದನು. ಇವನ ಕೈಕೆಳಗೆ ಇಪ್ಪತ್ತ
ನಾಲ್ಕು ಸಾವಿರ ಮಂದಿ ಸೈನಿಕರಿದ್ದರು. 14ಹನ್ನೊಂದನೆಯ
ಸೇನಾಪತಿ ಪಿರ್ರಾತೋನ್ಯನಾದ ಬೆನಾಯ. ಇವನು
ಎಫ್ರಾಯೀಮ್ ಕುಲದ ಪಿರ್ರಾತೋನ್ ಎಂಬಲ್ಲಿಂದ
ಬಂದವನು. ವರುಷದ ಹನ್ನೊಂದನೆಯ ತಿಂಗಳಿಗೆ ಇವನು
ಸೇನಾಪತಿಯಾಗಿದ್ದನು. ಇವನ ಕೈಕೆಳಗೆ ಇಪ್ಪತ್ತನಾಲ್ಕು
ಸಾವಿರ ಸೈನಿಕರಿದ್ದರು. 15ಹನ್ನೆರಡನೆಯ ಸೇನಾಪತಿ
ಹೆಲ್ದೈ. ಇವನು ನೆಟೋಪದ ಊರಿನ ಒತ್ನೀಯೇಲನ
ಸಂತತಿಯವನು. ವರುಪದ ಹನ್ನೆರಡನೆಯ ತಿಂಗಳಿನಲ್ಲಿ
ಇವನು ಸೇನಾಪತಿಯಾಗಿದ್ದನು. ಇವನ ಕೈಕೆಳಗೆ ಇಪ್ಪತ್ತ
ನಾಲ್ಕು ಸಾವಿರ ಸೈನಿಕರಿದ್ದರು.

## ಕುಲಪ್ರಧಾನರು

16ಇಸ್ರೇಲ್ ಕುಲಗಳ ನಾಯಕರು ಯಾರೆಂದರೆ:

ರೂಬೇನ್ಯರಲ್ಲಿ ಜಿಕ್ರೀಯ ಮಗ ಎಲೀಯೆಜರ್.
ಸಿಮೆಯೋನ್ಯರಲ್ಲಿ ಮಾಕನ ಮಗನಾದ ಶೆಫಟ್ಯ.
17 ಲೇವಿಯರಲ್ಲಿ ಕೆಮುವೇಲನ ಮಗನಾದ ಹಷಬ್ಯ.
ಆರೋನ್ಯರಲ್ಲಿ ಚಾದೋಕ್.
18 ಯೆಹೂದ್ಯರಲ್ಲಿ ಎಲೀಹು (ದಾವೀದನ ಅಣ್ಣಂದಿರ
ಲ್ಲೊಬ್ಬನು.) ಇಸ್ಸಾಕಾರರಲ್ಲಿ ಮೀಕಾಯೇಲನ
ಮಗ ಒಮ್ರಿ.
19 ಜೆಬೂಲೂನ್ಯರಲ್ಲಿ ಓಬದ್ಯನ ಮಗನಾದ
ಇಷ್ಮಾಯ. ನಫ್ತಾಲ್ಯರಲ್ಲಿ ಅಜ್ರೀಯೇಲನ
ಮಗನಾದ ಯೆರೀಮೋತ್.
20 ಎಫ್ರಾಯೀಮ್ಯರಲ್ಲಿ ಅಜಜ್ಯನ ಮಗನಾದ ಹೋಷೇ
ಯನು. ಪಶ್ಚಿಮ ಮನಸ್ಸೆಯವರಲ್ಲಿ ಪೆದಾಯನ
ಮಗ ಯೋವೇಲ್.
21 ಪೂರ್ವ ಮನಸ್ಸೆಯವರಲ್ಲಿ ಜೆಕರ್ಯನ ಮಗ
ಇದ್ದೋ. ಬೆನ್ಯಾಮೀನ್ಯರಲ್ಲಿ ಅಬ್ನೇರನ ಮಗ
ಯಗಸೀ ಯೇಲ್.
22 ದಾನ್ಯರಲ್ಲಿ ಯೆರೋಹಾಮನ ಮಗ ಅಜರೇಲ್.

ಇವರು ಇಸ್ರೇಲ್ ಗೋತ್ರ ಪ್ರಧಾನರು.

## ದಾವೀದನು ಇಸ್ರೇಲರನ್ನು ಲೆಕ್ಕಿಸಿದ್ದು

[23]ದೇವರು ಇಸ್ರೇಲರನ್ನು ಆಕಾಶದ ನಕ್ಷತ್ರದಷ್ಟು
ಹೆಚ್ಚಿಸುವೆನೆಂದು ವಾಗ್ದಾನ ಮಾಡಿದ್ದ ಪ್ರಕಾರ ಇಸ್ರೇಲರ
ಸಂಖ್ಯೆ ಅಪರಿಮಿತವಾಗಿತ್ತು. ಆದುದರಿಂದ ದಾವೀದನು
ಇಪ್ಪತ್ತು ವರ್ಷ ಪ್ರಾಯದ ಮೇಲ್ಪಟ್ಟ ಗಂಡಸರನ್ನು ಮಾತ್ರ
ಲೆಕ್ಕಿಸುವ ಆಲೋಚನೆ ಮಾಡಿದನು. [24]ಚೆರೂಯಳ ಮಗ
ನಾದ ಯೋವಾಬನು ಲೆಕ್ಕಿಸುವ ಕಾರ್ಯ ಪ್ರಾರಂಭಿ
ಸಿದನು. ಆದರೆ ಅವನು ಪೂರ್ಣಗೊಳಿಸಲಿಲ್ಲ. ದೇವರು
ಇಸ್ರೇಲರ ಮೇಲೆ ಕೋಪಗೊಂಡನು. ಇದರಿಂದಾಗಿ
ಇಸ್ರೇಲರ ಜನಸಂಖ್ಯೆಯನ್ನು ದಾವೀದನ ಚರಿತ್ರಾ
ಪುಸ್ತಕದಲ್ಲಿ ದಾಖಲೆ ಮಾಡಲಿಲ್ಲ.

## ಅರಸನ ಆಡಳಿತ ವರ್ಗದವರು

[25]ಅರಸನ ಆಸ್ತಿಗೆ ಜವಾಬ್ದಾರರಾಗಿದ್ದವರ ಪಟ್ಟಿ;

ಅದೀಯೇಲನ ಮಗನಾದ ಅಜ್ಮಾವೆತ್. ಇವನು ರಾಜನ ಉಗ್ರಾಣಗಳ ಅಧಿಕಾರಿಯಾಗಿದ್ದನು. ಉಜ್ಜೀಯನ ಮಗನಾದ ಯೋನಾತಾನ್; ಇವನು ಚಿಕ್ಕ ಊರುಗಳಲ್ಲಿ, ಹಳ್ಳಿಗಳಲ್ಲಿ, ಹೊಲಗಳಲ್ಲಿ ಮತ್ತು ಗೋಪುರಗಳಲ್ಲಿ ಇದ್ದ ಉಗ್ರಾಣಗಳಿಗೆ ಅಧಿಕಾರಿಯಾಗಿದ್ದನು.

26 ಕೆಲೂಬನ ಮಗನಾದ ಎಜ್ರೀಯು ರಾಜನ ವ್ಯವಸಾಯಗಾರರಿಗೆ ಅಧಿಕಾರಿಯಾಗಿದ್ದನು.

27 ರಾಮಾದ ಶಿಮ್ಮಾಯು ರಾಜನ ದ್ರಾಕ್ಷೆತೋಟಗಳ ಅಧಿಕಾರಿಯಾಗಿದ್ದನು. ಶಿಷ್ಮೀಯದ ಜಬ್ದೀಯು ರಾಜನ ದ್ರಾಕ್ಷೆತೋಟಗಳಿಂದ ದೊರಕಿದ ದ್ರಾಕ್ಷಾ ರಸದ ಉಗ್ರಾಣಗಳಿಗೆ ಅಧಿಕಾರಿಯಾಗಿದ್ದನು.

28 ಗೆದೆರಿನ ಬಾಳ್ಹಾನಾನ್ ಪಶ್ಚಿಮದ ಬೆಟ್ಟಪ್ರದೇಶ ದಲ್ಲಿ ಆಲಿವ್‌ಮರಗಳ ಮತ್ತು ಸಿಖಮೊರ್ ಮರಗಳ ತೋಪುಗಳಿಗೆ ಅಧಿಕಾರಿಯಾಗಿದ್ದನು. ಯೋವಾಷನು ಆಲಿವ್ ಎಣ್ಣೆಯ ಉಗ್ರಾಣಗಳಿಗೆ ಅಧಿಕಾರಿಯಾಗಿದ್ದನು.

29 ಶಾರೋನಿನ ಶಿಟ್ರೈಯು ಶಾರೋನಿನ ಸುತ್ತಮುತ್ತ ಲಿದ್ದ ರಾಜನ ಕುರಿದನಗಳ ಹಿಂಡುಗಳ ಅಧಿಕಾರಿ ಯಾಗಿದ್ದನು. ತಗ್ಗು ಪ್ರದೇಶಗಳಲ್ಲಿದ್ದ ರಾಜನ ಪಶುಗಳ ಹಿಂಡುಗಳಿಗೆ ಅದ್ಲೈಯ ಮಗ ಶಾಫಾಟನು ಅಧಿಕಾರಿಯಾಗಿದ್ದನು.

30 ಇಷ್ಮಾಯೇಲ್ಯನಾದ ಓಬೀಲನು ಒಂಟೆಗಳ ಮೇಲೆ ಅಧಿಕಾರಿಯಾಗಿದ್ದನು. ಮೇರೊನೋತ್ಯ ನಾದ ಯೆಹ್ದೆಯು ರಾಜನ ಕತ್ತೆಗಳ ಹಿಂಡಿಗೆ ಅಧಿಕಾರಿಯಾಗಿದ್ದನು.

31 ಹಗ್ರೀಯನಾದ ಯಾಜೀಜನು ರಾಜನ ಕುರಿ ಹಿಂಡುಗಳ ಮೇಲೆ ಅಧಿಕಾರಿಯಾಗಿದ್ದನು.

ಇವರೆಲ್ಲರೂ ರಾಜನ ಆಸ್ತಿಪಾಸ್ತಿಗಳ ಮೇಲ್ವಿಚಾರಕ
ರಾಗಿದ್ದರು.
[32]ದಾವೀದನ ಚಿಕ್ಕಪ್ಪನಾದ ಯೋನಾತಾನನು ಉತ್ತಮ
ಸಲಹೆಗಾರನಾಗಿದ್ದನು. ಹಕ್ಮೋನಿಯ ಮಗನಾದ
ಯೆಹೀಯೇಲನು ರಾಜನ ಗಂಡುಮಕ್ಕಳನ್ನು ಪಾಲನೆ
ಮಾಡುತ್ತಿದ್ದನು. [33]ಅಹೀತೋಫೆಲನು ರಾಜನ ಮಂತ್ರಾ
ಲೋಚಕನಾಗಿದ್ದನು. ಹೂಷೈ ರಾಜನ ಮಿತ್ರನಾಗಿದ್ದನು.
ಇವನು ಅರ್ಕೀಯ ಜನರಿಗೆ ಸೇರಿದವನಾಗಿದ್ದನು.
[34]ಬೆನಾಯನ ಮಗನಾದ ಯೆಹೋಯಾದವನೂ ಎಬ್ಯಾ
ತಾರನೂ ಅಹೀತೋಫೆಲನ ತರುವಾಯ ರಾಜನ
ಮಂತ್ರಾಲೋಚಕರಾದರು. ರಾಜನ ಸೈನ್ಯಕ್ಕೆ ಯೋವಾ
ಬನು ಪ್ರಧಾನಸೇನಾಪತಿಯಾಗಿದ್ದನು.

## ದೇವಾಲಯದ ನಕ್ಷೆ

28 ದಾವೀದನು ತನ್ನ ರಾಜ್ಯದಲ್ಲಿದ್ದ ಎಲ್ಲಾ ನಾಯಕ
ರನ್ನು ಅಂದರೆ ಕುಲಪ್ರಧಾನರನ್ನು, ಪ್ರಧಾನ
ಸೇನಾಧಿಪತಿಗಳನ್ನು, ಮಹಾಸೇನಾಧಿಪತಿಗಳನ್ನು ಮತ್ತು
ಸೇನಾಧಿಪತಿಗಳನ್ನು, ರಾಜನಿಗೂ ಅವನ ಗಂಡು
ಮಕ್ಕಳಿಗೂ ಸೇರಿದ ಆಸ್ತಿಯನ್ನು ಮತ್ತು ಪಶುಗಳನ್ನು
ನೋಡಿಕೊಳ್ಳುತ್ತಿದ್ದ ಅಧಿಕಾರಿಗಳನ್ನು; ರಾಜನ ಪ್ರಮುಖ
ಅಧಿಕಾರಿಗಳನ್ನು; ಬಲಿಷ್ಠ ಯುದ್ಧವೀರರನ್ನು, ಮತ್ತು
ಧೈರ್ಯವಂತರಾದ ಸೈನಿಕರನ್ನು ಜೆರುಸಲೇಮಿಗೆ ಕರೆಸಿ
ಸಭೆಸೇರಿಸಿದನು.
[2]ಎಲ್ಲರೂ ಸೇರಿಬಂದಾಗ ದಾವೀದನು ನಿಂತು
ಹೇಳಿದ್ದೇನಂದರೆ, ‘‘ನನ್ನ ಜನರೇ, ನನ್ನ ಸಹೋದರರೇ,
ನನ್ನ ಮಾತುಗಳನ್ನು ಕೇಳಿರಿ. ನಮ್ಮ ದೇವರ ಒಡಂಬ
ಡಿಕೆಯ ಪೆಟ್ಟಿಗೆಗೋಸ್ಕರ ಒಂದು ಯೋಗ್ಯ ಸ್ಥಳವನ್ನು
ನಿರ್ಮಿಸಬೇಕೆಂದು ನನ್ನ ಮನಸ್ಸಿನಲ್ಲಿತ್ತು. ಆ ಸ್ಥಳವು
ದೇವರ ಪಾದಪೀಠವಾಗಬೇಕು. ಅದಕ್ಕಾಗಿ ನಾನು
ದೇವರಿಗೆ ಆಲಯವನ್ನು ಕಟ್ಟಿಸಲು ಯೋಜನೆಯನ್ನು
ಹಾಕಿದೆನು. [3]ಆದರೆ ದೇವರು ನನಗೆ, ‘ದಾವೀದನೇ,
ನೀನು ನನ್ನ ಹೆಸರಿಗಾಗಿ ಆಲಯವನ್ನು ಕಟ್ಟಬಾರದು.
ಯಾಕೆಂದರೆ ನೀನೊಬ್ಬ ರಣವೀರನಾಗಿದ್ದುದರಿಂದ
ಎಷ್ಟೋ ಮಂದಿಯನ್ನು ಕೊಂದು ಅವರ ರಕ್ತಸುರಿಸಿರುವೆ’
ಎಂದು ಹೇಳಿದನು.
[4]‘‘ಇಸ್ರೇಲರ ದೇವರಾದ ಯೆಹೋವನು ಇಸ್ರೇಲರ
ಹನ್ನೆರಡು ಕುಲಗಳನ್ನು ಮುನ್ನಡೆಸಲು ಯೆಹೂದ ಕುಲ
ವನ್ನು ಆರಿಸಿಕೊಂಡಿದ್ದಾನೆ. ಆ ಕುಲದಿಂದ ದೇವರು ನನ್ನ
ತಂದೆಯ ಕುಟುಂಬವನ್ನು ಆರಿಸಿದ್ದಾನೆ; ಆ ಕುಟುಂಬ
ದಿಂದ ದೇವರು ಇಸ್ರೇಲರ ಅರಸನನ್ನಾಗಿ ನನ್ನನ್ನು

ಆರಿಸಿಕೊಂಡಿದ್ದಾನೆ. 5ಯೆಹೋವನು ನನಗೆ ಅನೇಕ
ಮಕ್ಕಳನ್ನು ಕೊಟ್ಟನು. ಆ ಮಕ್ಕಳಲ್ಲಿ ಯೆಹೋವನು
ಸೊಲೊಮೋನನನ್ನು ನನ್ನ ನಂತರ ಇಸ್ರೇಲರ ಅರಸನ
ನ್ನಾಗಿ ಆರಿಸಿಕೊಂಡಿದ್ದಾನೆ. ಆದರೆ ನಿಜವಾಗಿಯೂ,
ಇಸ್ರೇಲ್, ದೇವರಾದ ಯೆಹೋವನ ರಾಜ್ಯವಾಗಿದೆ.
6ಯೆಹೋವನು ನನಗೆ, ‘ದಾವೀದನೇ, ನಿನ್ನ ಮಗನಾದ
ಸೊಲೊಮೋನನು ದೇವಾಲಯವನ್ನು ಮತ್ತು ಅದರ
ಸುತ್ತಮುತ್ತಲಿನ ಕಟ್ಟಡಗಳನ್ನು ಕಟ್ಟುವನು. ಯಾಕೆಂದರೆ
ಸೊಲೊಮೋನನನ್ನು ನಾನು ಆರಿಸಿಕೊಂಡಿದ್ದೇನೆ.
ಅವನು ನನಗೆ ಮಗನಾಗಿರುವನು; ನಾನು ಅವನಿಗೆ ತಂದೆ
ಯಾಗಿರುವೆನು. 7ಸೊಲೊಮೋನನು ನನ್ನ ಕಟ್ಟಳೆಗಳಿಗೆ
ಮತ್ತು ಆಜ್ಞೆಗಳಿಗೆ ವಿಧೇಯನಾಗಿದ್ದಾನೆ. ಅವನು
ಹೀಗೆಯೇ ಮುಂದುವರಿದರೆ ನಾನು ಅವನ ರಾಜ್ಯವನ್ನು
ಶಾಶ್ವತವಾಗಿ ಬಲಗೊಳಿಸುವೆನು.’’’

8‘‘ನಾನು ದೇವರ ಸನ್ನಿಧಾನದಲ್ಲಿಯೂ ಎಲ್ಲಾ ಇಸ್ರೇ
ಲರ ಮುಂದೆಯೂ ನಿಮಗಿದನ್ನು ಹೇಳುತ್ತಿದ್ದೇನೆ. ನಿಮ್ಮ
ದೇವರಾದ ಯೆಹೋವನ ಎಲ್ಲಾ ಆಜ್ಞೆಗಳಿಗೆ ವಿಧೇಯ
ರಾಗಿರಿ. ಆಗ ನೀವು ಉತ್ತಮವಾದ ಈ ದೇಶವನ್ನು
ಅನುಭವಿಸುವಿರಿ; ನಿಮ್ಮ ಸಂತತಿಯವರೂ ಇದರ
ಸುಖವನ್ನು ಅನುಭವಿಸುವಂತೆ ಮಾಡುವಿರಿ.

9‘‘ನನ್ನ ಮಗನಾದ ಸೊಲೊಮೋನನೇ, ನಿನ್ನ ತಂದೆಯ
ದೇವರನ್ನು ನೀನು ಚೆನ್ನಾಗಿ ಅರಿತುಕೋ. ನೀನು
ಪೂರ್ಣಹೃದಯದಿಂದಲೂ ಪೂರ್ಣಮನಸ್ಸಿನಿಂದಲೂ
ನಿನ್ನ ದೇವರನ್ನು ಸೇವಿಸು. ದೇವರು ಪ್ರತಿಯೊಬ್ಬನ
ಹೃದಯ ಮನಸ್ಸುಗಳನ್ನು ನೋಡುತ್ತಾನೆ. ನೀನು ದೇವರ
ಸಹಾಯವನ್ನು ಕೇಳಿದರೆ ಆತನು ನಿನ್ನ ಪ್ರಾರ್ಥನೆಯನ್ನು
ಲಾಲಿಸುವನು. ಆದರೆ ನೀನು ದೇವರನ್ನು ಬಿಟ್ಟರೆ ಆತನು
ನಿನ್ನನ್ನು ಬಿಟ್ಟು ಹೋಗುವನು. 10ಸೊಲೊಮೋನನೇ,
ಆತನ ಪವಿತ್ರ ದೇವಾಲಯವನ್ನು ಕಟ್ಟಲು ದೇವರು
ನಿನ್ನನ್ನು ಆರಿಸಿಕೊಂಡಿರುತ್ತಾನೆಂಬುದನ್ನು ನೀನು ತಿಳಿಯ
ಬೇಕು. ಆದುದರಿಂದ ನೀನು ಬಲಗೊಂಡು ಕಾರ್ಯ
ವನ್ನು ಸಂಪೂರ್ಣಗೊಳಿಸು.’’

11ಆ ಬಳಿಕ ದಾವೀದನು ತನ್ನ ಮಗನಾದ ಸೊಲೊ
ಮೋನನಿಗೆ ದೇವಾಲಯದ ನಕ್ಷೆಯನ್ನು ಕೊಟ್ಟನು.
ದೇವಾಲಯ ಮತ್ತು ಅದರ ಮಂಟಪ, ಉಗ್ರಾಣದ
ಕೋಣೆಗಳು, ಮೇಲುಪ್ಪರಿಗೆ, ಒಳಗಿನ ಕೋಣೆಗಳು
ಮತ್ತು ಕೃಪಾಸನದ ಮಂದಿರದ ನಕ್ಷೆಗಳನ್ನು ಕೊಟ್ಟನು.
12ದೇವಾಲಯದ ಪ್ರತಿಯೊಂದು ಭಾಗದ ನಕ್ಷೆಯನ್ನು
ದಾವೀದನು ತಯಾರಿಸಿದ್ದನು. ದೇವಾಲಯದ ಸುತ್ತಣ
ಅಂಗಳಗಳ ನಕ್ಷೆ ಮತ್ತು ಸುತ್ತಲೂ ಇರುವ ಕೋಣೆಗಳ
ನಕ್ಷೆಯನ್ನು ದೇವಾಲಯದ ಪವಿತ್ರ ವಸ್ತುಗಳನ್ನು ಇಡುವ
ಕೋಣೆಗಳ ಯೋಜನೆಯನ್ನು ಮತ್ತು ನಕ್ಷೆಗಳನ್ನು
ಸೊಲೊಮೋನನಿಗೆ ಕೊಟ್ಟನು. 13ದಾವೀದನು ಸೊಲೊ
ಮೋನನಿಗೆ ಲೇವಿಯರ ಮತ್ತು ಯಾಜಕರ ತಂಡದ
ವಿಷಯವಾಗಿ ತಿಳಿಸಿದನು. ದೇವಾಲಯದ ಆರಾಧನಾ
ಕ್ರಮಗಳನ್ನು ಅದಕ್ಕೆ ಸಂಬಂಧಪಟ್ಟ ವಿವಿಧ ವಿಷಯ
ಗಳನ್ನು ಸೊಲೊಮೋನನಿಗೆ ದಾವೀದನು ವಿವರಿಸಿದನು.
14ದೇವಾಲಯದಲ್ಲಿ ಎಲ್ಲಾ ಸಲಕರಣೆಗಳಿಗೆ ಎಷ್ಟು
ಬೆಳ್ಳಿಬಂಗಾರಗಳು ಬೇಕಾಗುತ್ತವೆ ಎಂಬುದನ್ನು ದಾವೀ
ದನು ಸೊಲೊಮೋನನಿಗೆ ತಿಳಿಸಿದನು. 15ಬಂಗಾರದ
ದೀಪಗಳಿಗೆ ಮತ್ತು ದೀಪಸ್ತಂಭಗಳಿಗೆ, ಬೆಳ್ಳಿಯ
ದೀಪಗಳಿಗೆ ಮತ್ತು ದೀಪಸ್ತಂಭಗಳಿಗೆ ನಕ್ಷೆಗಳಿದ್ದವು. ಪ್ರತಿ
ಯೊಂದು ದೀಪ ಮತ್ತು ದೀಪಸ್ತಂಭಗಳಿಗೆ ಬೇಕಾಗುವ
ಬೆಳ್ಳಿಬಂಗಾರಗಳನ್ನು ಸಹ ದಾವೀದನು ಸೊಲೊ
ಮೋನನಿಗೆ ತಿಳಿಸಿದನು. ಅವಶ್ಯಕತೆಗೆ ತಕ್ಕಂತೆ ಈ ದೀಪ
ಸ್ತಂಭಗಳನ್ನು ಉಪಯೋಗಿಸಲಾಗುತ್ತಿತ್ತು. 16ಪವಿತ್ರ
ವಾದ ರೊಟ್ಟಿಯನ್ನು ಇಡುವ ಮೇಜನ್ನು ತಯಾರಿಸಲು
ಎಷ್ಟು ಬಂಗಾರ ಬೇಕಾಗುತ್ತದೆ ಮತ್ತು ಬೆಳ್ಳಿಯಿಂದ
ಮಾಡುವ ಮೇಜಿಗೆ ಎಷ್ಟು ಬೆಳ್ಳಿ ಬೇಕಾಗುತ್ತದೆ
ಎಂಬುದನ್ನು ಸಹ ದಾವೀದನು ತಿಳಿಸಿದನು. 17ಮುಳ್ಳು
ಚಮಚ, ಚಿಮಿಕಿಸುವ ಬೋಗುಣಿ ಮತ್ತು ಹೂಜಿಗಳಿಗೆ
ಬೇಕಾಗುವ ಚೊಕ್ಕ ಬಂಗಾರವನ್ನು ದಾವೀದನು
ತಿಳಿಸಿದನು; ಅಲ್ಲದೆ ಬೆಳ್ಳಿಬಂಗಾರಗಳಿಂದ ಮಾಡ
ಬೇಕಾದ ಬೋಗುಣಿಗಳಿಗೆ ಎಷ್ಟು ಬೆಳ್ಳಿಬಂಗಾರಗಳು
ಬೇಕಾಗುತ್ತದೆ ಎಂಬುದನ್ನು ತಿಳಿಸಿದನು. 18ಧೂಪವೇದಿಗೆ
ಎಷ್ಟು ಅಪ್ಪಟ ಬಂಗಾರ ಬೇಕೆಂಬುದನ್ನು ದಾವೀದನು
ತಿಳಿಸಿದನು. ಇದಲ್ಲದೆ ದೇವರ ಕೃಪಾಸನವನ್ನು ಮತ್ತು
ಯೆಹೋವನ ಒಡಂಬಡಿಕೆಯ ಪೆಟ್ಟಿಗೆಯ ಮೇಲೆ
ರೆಕ್ಕೆಗಳನ್ನು ಚಾಚಿಕೊಂಡಿರುವ ಕೆರೂಬಿ ದೂತರನ್ನು
ತಯಾರಿಸಲು ನಕ್ಷೆಗಳನ್ನು ದಾವೀದನು ಸೊಲೊ
ಮೋನನಿಗೆ ಕೊಟ್ಟನು. ಕೆರೂಬಿದೂತರನ್ನು ಚಿನ್ನದಿಂದ
ಮಾಡಲಾಗಿತ್ತು.

19ಆಮೇಲೆ ದಾವೀದನು, ‘‘ನಕ್ಷೆಗಳನ್ನೆಲ್ಲ ಮಾಡಲು
ಯೆಹೋವನೇ ನನ್ನನ್ನು ನಡಿಸಿ ಮಾರ್ಗದರ್ಶನ
ಕೊಟ್ಟನು. ಈ ನಕ್ಷೆಗಳಲ್ಲಿರುವ ಸಕಲ ವಿಷಯಗಳನ್ನು
ನಾನು ಅರಿತುಕೊಳ್ಳುವಂತೆ ಸಹಾಯ ಮಾಡಿದನು’’
ಎಂದು ಹೇಳಿದನು.

20ದಾವೀದನು ತನ್ನ ಮಗನಾದ ಸೊಲೊಮೋನನಿಗೆ,
‘‘ಧೈರ್ಯವಾಗಿದ್ದು ಬಲಗೊಳ್ಳು ಮತ್ತು ಈ ಕಾರ್ಯವನ್ನು
ಮಾಡಿ ಮುಗಿಸು. ನನ್ನ ದೇವರಾದ ಯೆಹೋವನು ನಿನ್ನ
ಸಂಗಡ ಇರುವದರಿಂದ ನೀನು ಭಯಪಡುವ ಕಾರಣವೇ
ಇಲ್ಲ. ಆತನು ನಿನ್ನೊಂದಿಗಿದ್ದು ಆಲಯವನ್ನು ಸಂಪೂರ್ಣ
ಮಾಡುವಂತೆ ನಿನ್ನನ್ನು ನಡೆಸುತ್ತಾನೆ. ನೀನು ಯೆಹೋವನ
ಆಲಯವನ್ನು ಕಟ್ಟುವೆ. 21ನೇಮಿಸಲ್ಪಟ್ಟ ಯಾಜಕರ
ಮತ್ತು ಲೇವಿಯರ ತಂಡಗಳು ದೇವಾಲಯದ ಸೇವೆಗಾಗಿ
ಸಿದ್ಧರಾಗಿದ್ದಾರೆ; ಅನುಭವಸ್ಥರಾದ ಕಾರ್ಮಿಕರು

ದೇವಾಲಯದ ಕೆಲಸಕ್ಕಾಗಿ ಸಿದ್ಧರಾಗಿದ್ದಾರೆ. ಕೆಲಸದ
ಮೇಲ್ವಿಚಾರಣೆ ಮಾಡುವ ಅಧಿಕಾರಿಗಳು ನಿನ್ನ ಆಜ್ಞೆ
ಯನ್ನು ಪರಿಪಾಲಿಸಲು ಸಿದ್ಧರಾಗಿದ್ದಾರೆ'' ಎಂದು
ದಾವೀದನು ಸೊಲೊಮೋನನಿಗೆ ಹೇಳಿದನು.

### ದೇವಾಲಯ ಕಟ್ಟಲು ಕೊಟ್ಟ ಕಾಣಿಕೆ

29 ನೆರೆದುಬಂದಿದ್ದ ಇಸ್ರೇಲರೆಲ್ಲರಿಗೆ ದಾವೀ
ದನು, ''ದೇವರು ನನ್ನ ಮಗನಾದ ಸೊಲೊ
ಮೋನನನ್ನು ಆರಿಸಿಕೊಂಡಿರುತ್ತಾನೆ. ಅವನು ಇನ್ನೂ
ಎಳೆಪ್ರಾಯದವನಾಗಿರುವದರಿಂದ ಈ ಕಾರ್ಯವನ್ನು
ಮಾಡಿಸಬೇಕಾದ ಜ್ಞಾನವು ಅವನಲ್ಲಿಲ್ಲ. ಆದರೆ ಕೆಲಸವು
ಅತಿ ಘನವಾದದ್ದು. ಕಟ್ಟುವ ಆಲಯವು ಮನುಷ್ಯ
ರಿಗಾಗಿಯಲ್ಲ. ದೇವರಾದ ಯೆಹೋವನಿಗಾಗಿಯಷ್ಟೇ.
2 ದೇವಾಲಯವನ್ನು ಕಟ್ಟಲು ಅದಕ್ಕೆ ಬೇಕಾದ ಬೆಳ್ಳಿ,
ಬಂಗಾರ, ತಾಮ್ರ ಮುಂತಾದವುಗಳನ್ನು ಬಹು
ಪ್ರಯಾಸದಿಂದ ಶೇಖರಿಸಿದ್ದೇನೆ. ಬಂಗಾರದಿಂದ ಮಾಡ
ಬೇಕಾದ ಸಾಮಗ್ರಿಗಳಿಗೆ ಬೇಕಾದ ಬಂಗಾರವನ್ನು
ಕೊಟ್ಟಿರುತ್ತೇನೆ. ಬೆಳ್ಳಿಯಿಂದ ತಯಾರಿಸಬೇಕಾದ
ಸಾಮಗ್ರಿಗಳಿಗೆ ತಗಲುವ ಬೆಳ್ಳಿಯನ್ನು ಕೊಟ್ಟಿರುತ್ತೇನೆ.
ಹಾಗೆಯೇ ತಾಮ್ರದ ವಸ್ತುಗಳಿಗೆ ಬೇಕಾಗುವ ತಾಮ್ರ
ವನ್ನು ಕೊಟ್ಟಿದ್ದೇನೆ; ಕಬ್ಬಿಣದ ವಸ್ತುಗಳಿಗೆ ಬೇಕಾಗುವ
ಕಬ್ಬಿಣವನ್ನು ಕೊಟ್ಟಿದ್ದೇನೆ; ಮರದಿಂದ ಮಾಡುವ
ಸಾಮಗ್ರಿಗಳಿಗೆ ಬೇಕಾಗುವ ಮರವನ್ನು ಕೊಟ್ಟಿದ್ದೇನೆ;
ನೀಲಿಬಣ್ಣದ ರತ್ನಗಳನ್ನು, ಚೌಕಟ್ಟಿಗೆ ಬೇಕಾದ ರತ್ನ
ಗಳನ್ನು, ಹೊಳೆಯುವ ನಾನಾಬಣ್ಣದ ಹರಳುಗಳನ್ನು,
ಬಿಳಿಬಣ್ಣದ ಹಾಲುಗಲ್ಲುಗಳನ್ನು ಬೇಕಾದಷ್ಟು ಸಂಗ್ರ
ಹಿಸಿಟ್ಟಿದ್ದೇನೆ.
3 ಅಲ್ಲದೆ ದೇವಾಲಯಕ್ಕೆ ಬೇಕಾದ ಬೆಳ್ಳಿ
ಬಂಗಾರಗಳ ಸಾಮಾನುಗಳನ್ನು ನಾನು ಕಾಣಿಕೆಯಾಗಿ
ಕೊಟ್ಟಿರುತ್ತೇನೆ. ಯಾಕೆಂದರೆ ನನ್ನ ದೇವರ ಪರಿಶುದ್ಧಾ
ಲಯವು ಕಟ್ಟಲ್ಪಡಬೇಕೆಂಬುದು ನಿಜವಾಗಿಯೂ ನನ್ನ
ಬಯಕೆಯಾಗಿದೆ. ಈ ಪವಿತ್ರ ದೇವಾಲಯವನ್ನು ಕಟ್ಟಲು
ನಾನು ಈ ವಸ್ತುಗಳನ್ನೆಲ್ಲಾ ಕೊಡುತ್ತಿದ್ದೇನೆ.
4 ನಾನು
ನೂರಹತ್ತು ಟನ್ ತೂಕದ ಓಫೀರಿನ ಅಪ್ಪಟ ಬಂಗಾರ
ವನ್ನೂ ದೇವಾಲಯದ ಗೋಡೆಗಳನ್ನು ಮುಚ್ಚಲು
ಬೇಕಾದ ಇನ್ನೂರರವತ್ತು ಟನ್ ತೂಕದ ಬೆಳ್ಳಿಯನ್ನೂ
5 ಬೆಳ್ಳಿಬಂಗಾರಗಳಿಂದ ತಯಾರಿಸಬೇಕಾದ ಎಲ್ಲಾ ವಸ್ತು
ಗಳಿಗೆ ಬೇಕಾದ ಬೆಳ್ಳಿಬಂಗಾರಗಳನ್ನೂ ಇದರ ನಾಜೂಕು
ಕೆಲಸ ಮಾಡುವ ಕುಶಲಕರ್ಮಿಗಳನ್ನೂ ಕೊಟ್ಟಿರುತ್ತೇನೆ.
ಈಗ ನಿಮ್ಮಲ್ಲಿ ಎಷ್ಟು ಮಂದಿ ನಿಮ್ಮನ್ನೇ ಯೆಹೋವನಿಗಾಗಿ
ಪ್ರತಿಷ್ಠಿಸಿಕೊಳ್ಳುವಿರಿ?'' ಎಂದು ಹೇಳಿದನು.

6 ಆಗ ಇಸ್ರೇಲರ ಕುಲಪ್ರಧಾನರು, ಕುಟುಂಬಗಳ
ನಾಯಕರು, ಪ್ರಧಾನಸೇನಾಧಿಪತಿಗಳು, ಸೇನಾಧಿಪತಿ
ಗಳು, ರಾಜನ ಕೆಲಸಕ್ಕಾಗಿ ನೇಮಕಗೊಂಡಿದ್ದ ಅಧಿಕಾರಿ
ಗಳು, ತಮ್ಮಲ್ಲಿದ್ದ ಬೆಲೆಬಾಳುವ ವಸ್ತುಗಳನ್ನು ಕೊಟ್ಟರು.
7 ದೇವಾಲಯಕ್ಕಾಗಿ ಅವರು ಒಟ್ಟು ನೂರತೊಂಭತ್ತು
ಟನ್ ತೂಕದ ಬಂಗಾರ, ಮುನ್ನೂರ ಎಪ್ಪತ್ತೈದು ಟನ್
ತೂಕದ ಬೆಳ್ಳಿ, ಆರನೂರ ಎಪ್ಪತ್ತೈದು ಟನ್ ತೂಕದ
ತಾಮ್ರ ಮತ್ತು ಮೂರು ಸಾವಿರದ ಏಳುನೂರೈವತ್ತು ಟನ್
ತೂಕದ ಕಬ್ಬಿಣವನ್ನು ಕೊಟ್ಟರು.
8 ಯಾರ ಬಳಿಯಲ್ಲಿ
ಬೆಲೆಬಾಳುವ ರತ್ನಗಳಿದ್ದವೋ ಅವುಗಳನ್ನು ದೇವರ
ಆಲಯಕ್ಕಾಗಿ ಸಮರ್ಪಿಸಿದರು. ಗೇರ್ಷೋನ್ ಸಂತತಿ
ಯವನಾದ ಯೆಹೀಯೇಲನು ಅವುಗಳನ್ನು ತನ್ನ ವಶಕ್ಕೆ
ತೆಗೆದುಕೊಂಡನು.
9 ಇಸ್ರೇಲರ ನಾಯಕರುಗಳು
ಪೂರ್ಣಹೃದಯದಿಂದಲೂ ಸ್ವಇಚ್ಛೆಯಿಂದಲೂ ಇಷ್ಟೆಲ್ಲಾ
ಕಾಣಿಕೆಗಳನ್ನು ಕೊಟ್ಟಿದ್ದರಿಂದ ಇಸ್ರೇಲರು ಸಂತೋಷ
ಗೊಂಡರು; ಅರಸನಾದ ದಾವೀದನೂ ತುಂಬ ಸಂತೋಷ
ಗೊಂಡನು.

### ದಾವೀದನ ವಿಶೇಷ ಪ್ರಾರ್ಥನೆ

10 ನೆರೆದುಬಂದಿದ್ದ ಎಲ್ಲಾ ಜನರ ಮುಂದೆ ದಾವೀದನು
ದೇವರಾದ ಯೆಹೋವನನ್ನು ಸ್ತುತಿಸಿ ಹೀಗೆ
ಪ್ರಾರ್ಥಿಸಿದನು:

''ಇಸ್ರೇಲರ ದೇವರಾದ ಯೆಹೋವನೇ, ನಮ್ಮ
ತಂದೆಯೇ, ನಿನಗೆ ನಿರಂತರವಾಗಿ ಕೊಂಡಾಟ
ವಾಗಲಿ.

11 ಯೆಹೋವನೇ, ಮಹತ್ವ, ಸಾಮರ್ಥ್ಯ, ಮಹಿಮೆ,
ಜಯ ಮತ್ತು ಗೌರವಗಳು ನಿನ್ನವೇ ಆಗಿವೆ.
ಭೂಮ್ಯಾಕಾಶಗಳಲ್ಲಿರುವುದೆಲ್ಲಾ ನಿನ್ನವೇ.
ಯೆಹೋವನೇ, ರಾಜ್ಯವು ನಿನ್ನದೇ. ನೀನೇ ಅದರ
ಶಿರಸ್ಸು; ಅದನ್ನಾಳುವಾತನೂ ನೀನೇ.

12 ಗೌರವವೂ ಐಶ್ವರ್ಯವೂ ನಿನ್ನಿಂದಲೇ ಹೊರಡು
ವವು. ಎಲ್ಲವನ್ನು ಆಳುವಾತನು ನೀನೇ. ನಿನ್ನ
ಬಾಹುಗಳಲ್ಲಿ ಶಕ್ತಿ ಸಾಮರ್ಥ್ಯವು ತುಂಬಿವೆ.
ಯಾರನ್ನೇ ಆಗಲಿ ಮಹಾಪುರುಷರನ್ನಾಗಿಯೂ
ಪ್ರಬಲರನ್ನಾಗಿಯೂ ಮಾಡುವ ಶಕ್ತಿಯಿರುವುದು
ನಿನ್ನ ಕೈಗಳಲ್ಲಿಯೇ.

13 ನಮ್ಮ ದೇವರೇ, ನಿನಗೆ ನಾವು ಕೃತಜ್ಞತೆಯನ್ನು
ಸಲ್ಲಿಸುತ್ತೇವೆ. ನಿನ್ನ ಪ್ರಭಾವವುಳ್ಳ ನಾಮವನ್ನು
ಸ್ತುತಿಸು ತ್ತೇವೆ.

14 ನಾವು ಕಾಣಿಕೆಯಾಗಿ ಕೊಟ್ಟಿರುವ ವಸ್ತುಗಳು
ನನ್ನಿಂದಾಗಲೀ ಮತ್ತು ನನ್ನ ಜನರಿಂದಾಗಲೀ
ಬರಲಿಲ್ಲ. ಇವೆಲ್ಲವೂ ನಿನ್ನಿಂದಲೇ ಬಂದವುಗಳು.
ನಿನ್ನಿಂದ ನಾವು ಹೊಂದಿದವುಗಳನ್ನೇ ನಿನಗೆ
ಕೊಟ್ಟಿದ್ದೇವೆ.

15 ನಾವು ನಮ್ಮ ಪೂರ್ವಿಕರಂತೆ ಈ ಲೋಕದಲ್ಲಿ
ಪ್ರವಾಸಿಗಳಾಗಿದ್ದೇವೆ; ದಾಟಿಹೋಗುವ ನೆರಳಿ

ನಂತೆ ನಾವು ಈ ಲೋಕದಲ್ಲಿರುತ್ತೇವೆ. ಅದನ್ನು ನಿಲ್ಲಿಸಲು ನಮಗೆ ಸಾಧ್ಯವಿಲ್ಲ.

16 ನಮ್ಮ ದೇವರಾದ ಯೆಹೋವನೇ, ನಿನ್ನ ಆಲಯ ವನ್ನು ಕಟ್ಟುವದಕ್ಕಾಗಿ ನಾವು ಇವೆಲ್ಲವನ್ನೂ ಒಟ್ಟು ಗೂಡಿಸಿದ್ದೇವೆ. ನಿನ್ನ ಪವಿತ್ರ ಹೆಸರನ್ನು ಪ್ರಸಿದ್ಧಿ ಪಡಿಸಲು ನಾವು ಆಲಯವನ್ನು ಕಟ್ಟುತ್ತೇವೆ. ಆದರೆ ಇವೆಲ್ಲಾ ನಿನ್ನಿಂದಲೇ ಬಂದವುಗಳು; ಇವೆಲ್ಲಾ ನಿನಗೇ ಸಂಬಂಧ ಪಟ್ಟವುಗಳು.

17 ನನ್ನ ದೇವರೇ, ನೀನು ಜನರ ಹೃದಯಗಳನ್ನು ಪರೀಕ್ಷಿಸುವೆ. ಜನರು ಒಳ್ಳೆಯ ಕಾರ್ಯವನ್ನು ಯಥಾರ್ಥವಾದ ಹೃದಯದಿಂದ ಮಾಡುವಾಗ ನೀನು ಸಂತೋಷಪಡುವೆ. ಈ ವಸ್ತುಗಳನ್ನೆಲ್ಲಾ ನಾನು ಶುದ್ಧಹೃದಯದಿಂದ ಕೊಡುತ್ತಿದ್ದೇನೆ. ಇಲ್ಲಿ ನೆರೆದುಬಂದಿರುವವರೆಲ್ಲರೂ ನಿನಗೆ ಕಾಣಿಕೆ ಯನ್ನು ಸ್ವಯಿಚ್ಛೆಯಿಂದ ಕೊಟ್ಟಿದ್ದಾರೆ.

18 ಯೆಹೋವನೇ, ನೀನು ನಮ್ಮ ಪೂರ್ವಿಕರಾದ ಅಬ್ರಹಾಮ, ಇಸಾಕ ಮತ್ತು ಯಾಕೋಬರ ದೇವರು ನೀನೇ. ನಿನ್ನ ಜನರು ಸರಿಯಾಗಿ ಯೋಜನೆ ಹಾಕುವಂತೆ ಸಹಾಯಿಸು. ನಿನ್ನನ್ನು ನಿಷ್ಠೆಯಿಂದಲೂ ಸತ್ಯದಿಂದಲೂ ಸೇವೆ ಮಾಡು ವಂತೆ ಸ'ಹಾಯಿಸು.

19 ನನ್ನ ಮಗನಾದ ಸೊಲೊಮೋನನೂ ನಿನಗೆ ನಂಬಿಗಸ್ತನಾಗಿರುವಂತೆ ಸಹಾಯಮಾಡು. ನಿನ್ನ ಆಜ್ಞೆ, ಕಟ್ಟಳೆ ಮತ್ತು ನಿಯಮಗಳನ್ನು ಅನುಸರಿ ಸಲು ಸಹಾಯ ಮಾಡು. ನಿನ್ನ ಮಂದಿರಕ್ಕಾಗಿ ನಾನು ಇಷ್ಟೆಲ್ಲವನ್ನು ಸಿದ್ಧಮಾಡಿರುವೆನಲ್ಲಾ, ಅವನು ಅದನ್ನು ಕಟ್ಟಿ ಪೂರ್ಣಗೊಳಿಸಲು ಸಹಾಯಮಾಡು.''

20 ನೆರೆದುಬಂದವರಿಗೆ ದಾವೀದನು, ''ದೇವರಾದ ಯೆಹೋವನಿಗೆ ಸ್ತೋತ್ರಮಾಡಿರಿ'' ಎಂದನು. ಆಗ ಎಲ್ಲರೂ ಅವರ ಪೂರ್ವಿಕರ ದೇವರಿಗೆ ಸ್ತುತಿಸುತ್ತಾ ತಲೆಬಾಗಿ ದೇವರನ್ನೂ ಅರಸನನ್ನೂ ನಮಸ್ಕರಿಸಿದರು.

## ಸೊಲೊಮೋನನಿಗೆ ಪಟ್ಟಾಭಿಷೇಕ

21 ಮರುದಿವಸ ಜನರು ಯೆಹೋವನಿಗೆ ಯಜ್ಞಗಳನ್ನೂ
ಸರ್ವಾಂಗಹೋಮಗಳನ್ನೂ ಅರ್ಪಿಸಿದರು. ಒಂದು
ಸಾವಿರ ಹೋರಿಗಳು, ಒಂದುಸಾವಿರ ಟಗರುಗಳು,
ಒಂದುಸಾವಿರ ಆಡುಗಳು ಮತ್ತು ಪಾನದ್ರವ್ಯಗಳನ್ನು
ಅರ್ಪಿಸಿದರು. ಇಡೀ ಇಸ್ರೇಲ್ ಜನಾಂಗಕ್ಕಾಗಿ ಯಜ್ಞ
ವನ್ನರ್ಪಿಸಿದರು.
22 ಆ ದಿವಸ ಸೇರಿಬಂದ ಜನರು
ಯೆಹೋವನ ಸನ್ನಿಧಿಯಲ್ಲಿ ಅನ್ನಪಾನಗಳನ್ನು ತೆಗೆದು
ಕೊಂಡು ಉಲ್ಲಾಸಿಸಿದರು. ಅವರು ದಾವೀದನ ಮಗ
ನಾದ ಸೊಲೊಮೋನನನ್ನು ಅರಸನನ್ನಾಗಿಯೂ
ಚಾದೋಕನನ್ನು ಮಹಾ ಯಾಜಕನನ್ನಾಗಿಯೂ
ಯೆಹೋವನ ಸನ್ನಿಧಿಯಲ್ಲಿ ಅಭಿಷೇಕಿಸಿದರು.

23 ಆ ಬಳಿಕ ಸೊಲೊಮೋನನು ತನ್ನ ತಂದೆಯ ಬದ
ಲಾಗಿ ರಾಜನಾಗಿ ಪ್ರಭುವಿನ ಸಿಂಹಾಸನದ ಮೇಲೆ ಕುಳಿತು
ಕೊಂಡನು. ಸೊಲೊಮೋನನನ್ನು ಎಲ್ಲಾ ಇಸ್ರೇಲರು
ಗೌರವಿಸಿದರು ಮತ್ತು ವಿಧೇಯರಾದರು.
24 ಎಲ್ಲಾ
ನಾಯಕರು, ಸೈನಿಕರು ಮತ್ತು ದಾವೀದನ ಗಂಡುಮಕ್ಕಳು
ಸೊಲೊಮೋನನನ್ನು ತಮ್ಮ ಅರಸನನ್ನಾಗಿ ಸ್ವೀಕರಿಸಿ
ಅವನಿಗೆ ವಿಧೇಯರಾದರು.
25 ಯೆಹೋವನು ಸೊಲೊ
ಮೋನನನ್ನು ಆಶೀರ್ವದಿಸಿ ಅಭಿವೃದ್ಧಿಪಡಿಸಿದನು. ಇಸ್ರೇ
ಲಿನಲ್ಲಿದ್ದ ಯಾವ ಅರಸನಿಗೂ ಸೊಲೊಮೋನನಿಗಿದ್ದಷ್ಟು
ಗೌರವವು ವೈಭವವು ಇರಲಿಲ್ಲ.

## ದಾವೀದನ ಮರಣ

26-27 ಇಷಯನ ಮಗನಾದ ದಾವೀದನು ಇಸ್ರೇಲರನ್ನು
ನಲವತ್ತುವರುಷ ಆಳಿದನು. ಅವನು ಹೆಬ್ರೋನಿನಲ್ಲಿ
ಏಳುವರುಷ ರಾಜ್ಯಪಾಲನೆ ಮಾಡಿದನು ಮತ್ತು ಜೆರುಸ
ಲೇಮಿನಲ್ಲಿ ಮೂವತ್ತುಮೂರು ವರುಷ ಆಳಿದನು.
28 ಅವನು ಬಹಳ ಮುದುಕನಾಗಿ ಸತ್ತನು. ಅವನ ದೀರ್ಘಾ
ಯುಷ್ಯದಲ್ಲಿ ಹೆಚ್ಚಾದ ಗೌರವ ಸನ್ಮಾನಗಳು ದೊರೆತವು.
ಅವನ ನಂತರ ಮಗನಾದ ಸೊಲೊಮೋನನು
ಅರಸನಾದನು.

29 ಪ್ರಾರಂಭದಿಂದ ಹಿಡಿದು ಕೊನೆಯತನಕ ದಾವೀ
ದನು ಮಾಡಿದ ಎಲ್ಲಾ ಕೃತ್ಯಗಳನ್ನು ದರ್ಶಿಯಾದ
ಸಮುವೇಲ, ಪ್ರವಾದಿಯಾದ ನಾತಾನ ಮತ್ತು ದರ್ಶಿ
ಯಾದ ಗಾದ್ ಇವರ ಚರಿತ್ರೆಗಳಲ್ಲಿ ಬರೆಯಲ್ಪಟ್ಟಿವೆ.
30 ಇಸ್ರೇಲಿನ ರಾಜನಾಗಿದ್ದಾಗ ದಾವೀದನು ಮಾಡಿದ
ಎಲ್ಲಾ ಸಾಹಸಕೃತ್ಯಗಳನ್ನೂ ಅವನ ಪರಾಕ್ರಮ ಮತ್ತು
ಅವನಿಗೆ ಸಂಭವಿಸಿದೆಲ್ಲದ್ದರ ಕುರಿತಾಗಿ ಅವುಗಳಲ್ಲಿ
ಬರೆಯಲಾಗಿದೆ. ಇಸ್ರೇಲಿನ ಮತ್ತು ಅದರ ಸಮೀಪದಲ್ಲಿ
ಅನ್ಯ ಜನಾಂಗಗಳ ಕುರಿತಾದ ಸಂಗತಿಗಳನ್ನು ಅವುಗಳಲ್ಲಿ
ಬರೆಯಲಾಗಿದೆ.

# 2 ಪೂರ್ವಕಾಲವೃತ್ತಾಂತ

### ಸೊಲೊಮೋನನು ಜ್ಞಾನವನ್ನು ಕೇಳಿಕೊಂಡದ್ದು

1 ದೇವರಾದ ಯೆಹೋವನು ಸೊಲೊಮೋನ
ನೊಂದಿಗೆ ಇದ್ದುದರಿಂದ ಸೊಲೊಮೋನನು ಬಹು
ಬಲಿಷ್ಠನಾದ ಅರಸನಾಗಿ ಪ್ರಖ್ಯಾತನಾದನು.
2ಸೊಲೊಮೋನನು ಇಸ್ರೇಲರನ್ನೂ ಅಂದರೆ ನ್ಯಾಯಾ
ಧಿಪತಿಗಳನ್ನೂ ಸೇನಾಧಿಪತಿಗಳನ್ನೂ ಕುಲ ಪ್ರಧಾನರನ್ನೂ
ಕರೆಯಿಸಿ 3ಅವರೊಂದಿಗೆ ಗಿಬ್ಯೋನಿನ ಉನ್ನತಸ್ಥಳಕ್ಕೆ
ಹೋದನು. ದೇವದರ್ಶನಗುಡಾರವು ಅಲ್ಲಿತ್ತು. ಅರಣ್ಯ
ದಲ್ಲಿ ಇಸ್ರೇಲರು ಪ್ರಯಾಣಿಸುತ್ತಿದ್ದಾಗ ಯೆಹೋವನ
ಸೇವಕನಾದ ಮೋಶೆಯು ಗುಡಾರವನ್ನು ಮಾಡಿಸಿದ್ದನು.
4ದೇವರ ಒಡಂಬಡಿಕೆಯ ಪೆಟ್ಟಿಗೆಯನ್ನು ದಾವೀದನು
ಕಿರ್ಯತ್ಯಾರೀಮಿನಿಂದ ಜೆರುಸಲೇಮಿಗೆ ತಂದು ಅಲ್ಲಿ
ತಾನು ಅದಕ್ಕಾಗಿ ಏರ್ಪಡಿಸಿದ್ದ ಸ್ಥಳದಲ್ಲಿ ಪ್ರತಿಷ್ಠಿಸಿದನು;
ಮತ್ತು ಅದಕ್ಕೆ ಗುಡಾರವನ್ನು ನಿರ್ಮಿಸಿದ್ದನು.
5ಊರೀಯ ಮಗನಾದ ಬೆಚಲೇಲನು ಮಾಡಿದ
ತಾಮ್ರದ ಯಜ್ಞವೇದಿಕೆಯು ಗಿಬ್ಯೋನಿನಲ್ಲಿದ್ದ ಪವಿತ್ರ
ಗುಡಾರದ ಮುಂದೆ ಇಡಲ್ಪಟ್ಟಿತ್ತು. ಆದುದರಿಂದ
ಸೊಲೊಮೋನನೂ ಇಸ್ರೇಲರೂ ಗಿಬ್ಯೋನಿಗೆ
ಹೋದರು. 6ದೇವದರ್ಶನಗುಡಾರದ ಮುಂಭಾಗ
ದಲ್ಲಿದ್ದ ತಾಮ್ರದ ಯಜ್ಞವೇದಿಕೆಯ ಬಳಿಗೆ ಸೊಲೊ-
ಮೋನನು ಹೋಗಿ ಅದರ ಮೇಲೆ ಒಂದು ಸಾವಿರ
ಸರ್ವಾಂಗಹೋಮಗಳನ್ನು ಸಮರ್ಪಿಸಿದನು.
7ಆ ರಾತ್ರಿ ದೇವರು ಸೊಲೊಮೋನನಿಗೆ ದರ್ಶನ
ನೀಡಿ, ''ಸೊಲೊಮೋನನೇ, ನಿನ್ನ ಕೋರಿಕೆಯೇನು?''
ಎಂದು ಕೇಳಿದನು.
8ಆಗ ಸೊಲೊಮೋನನು ದೇವರಿಗೆ, ''ನೀನು ನನ್ನ
ತಂದೆಯಾದ ದಾವೀದನ ಮೇಲೆ ಮಹಾಕೃಪೆಯನ್ನು
ತೋರಿ ಅವನ ಸ್ಥಾನದಲ್ಲಿ ಅರಸನಾಗುವದಕ್ಕೆ ನನ್ನನ್ನು
ಆರಿಸಿಕೊಂಡಿರುವೆ. 9ದೇವರಾದ ಯೆಹೋವನೇ ನೀನು
ನನ್ನ ತಂದೆಯಾದ ದಾವೀದನಿಗೆ ಮಾಡಿರುವ ವಾಗ್ದಾನ
ವನ್ನು ನೆರವೇರಿಸು. ಒಂದು ದೊಡ್ಡ ರಾಜ್ಯಕ್ಕೆ ನನ್ನನ್ನು
ಅರಸನನ್ನಾಗಿ ನೇಮಿಸಿರುತ್ತೀ. ಅದರಲ್ಲಿ ಭೂಮಿಯ
ಧೂಳಿನೋಪಾದಿಯಲ್ಲಿ ಜನರು ತುಂಬಿದ್ದಾರೆ. 10ಈ
ಜನರನ್ನು ಸರಿಯಾದ ರೀತಿಯಲ್ಲಿ ಆಳುವ ಹಾಗೆ ನನಗೆ
ಜ್ಞಾನವನ್ನೂ ವಿವೇಕವನ್ನೂ ದಯಪಾಲಿಸು. ನಿನ್ನ
ಸಹಾಯವಿಲ್ಲದೆ ಈ ನಿನ್ನ ಜನರನ್ನು ಆಳಲು ಯಾರಿಗೂ
ಸಾಧ್ಯವಿಲ್ಲ'' ಎಂದು ಹೇಳಿದನು.
11ಆಗ ದೇವರು ಸೊಲೊಮೋನನಿಗೆ, ''ನಿನ್ನ ಕೋರಿಕೆ
ಒಳ್ಳೆಯದಾಗಿದೆ. ನೀನು ಐಶ್ವರ್ಯವನ್ನಾಗಲೀ, ಗೌರವ
ವನ್ನಾಗಲೀ, ಬೆಳ್ಳಿ ಬಂಗಾರಗಳನ್ನಾಗಲೀ ಕೇಳಲಿಲ್ಲ. ನಿನ್ನ
ವೈರಿಗಳನ್ನು ನಿರ್ಮೂಲ ಮಾಡುವಂತಾಗಲೀ ಅಥವಾ
ನಿನಗೆ ದೀರ್ಘ ಆಯುಷ್ಯವನ್ನು ಕೊಡು ಎಂದಾಗಲೀ
ನೀನು ಕೇಳಿಕೊಳ್ಳದೆ ರಾಜ್ಯವನ್ನು ನ್ಯಾಯವಾಗಿ ಆಳಲು
ಬೇಕಾದ ಜ್ಞಾನವಿವೇಕಗಳನ್ನು ಕೇಳಿಕೊಂಡೆ. ನಾನು
ಆರಿಸಿಕೊಂಡಿರುವ ಜನಾಂಗದ ಮೇಲೆ ಆಡಳಿತ ನಡಿಸು
ವಾಗ ಯೋಗ್ಯವಾದ ಸಲಹೆ ಕೊಡುವಂತೆ ಜ್ಞಾನವನ್ನು
ಕೇಳಿರುತ್ತೀ. 12ನಾನು ನಿನಗೆ ಜ್ಞಾನ ವಿವೇಕಗಳನ್ನು
ಕೊಡುವೆನು. ಅದರ ಜೊತೆಯಲ್ಲಿ ನಿನಗೆ ಐಶ್ವರ್ಯ
ವನ್ನೂ ಘನತೆಯನ್ನೂ ದಯಪಾಲಿಸುವೆನು. ನಿನಗಿಂತ
ಮುಂಚೆ ಇದ್ದ ಯಾವ ಅರಸನಿಗೂ ಇಂಥಾ ಐಶ್ವರ್ಯ
ಗಳಾಗಲೀ ಘನತೆಯಾಗಲೀ ಇರಲಿಲ್ಲ. ಮತ್ತು ಇನ್ನು
ಮುಂದೆಯೂ ಯಾವ ರಾಜನಿಗೂ ಇಂಥಾ ಘನತೆ ಮತ್ತು
ಐಶ್ವರ್ಯಗಳಿರುವುದಿಲ್ಲ.''
13ಸೊಲೊಮೋನನು ಗಿಬ್ಯೋನಿನಲ್ಲಿ ಆರಾಧನಾ
ಸ್ಥಳಕ್ಕೆ ಹೋದನು. ಬಳಿಕ ಅವನು ದೇವದರ್ಶನ ಗುಡಾರ
ದಿಂದ ಜೆರುಸಲೇಮಿಗೆ ಹಿಂದಿರುಗಿ ರಾಜ್ಯಭಾರವನ್ನು
ಮಾಡತೊಡಗಿದನು.

### ಸೊಲೊಮೋನನು ಸೈನ್ಯವನ್ನೂ ತನ್ನ ಐಶ್ವರ್ಯವನ್ನೂ ಹೆಚ್ಚಿಸಿಕೊಂಡದ್ದು

14ಸೊಲೊಮೋನನು ಕುದುರೆಗಳನ್ನೂ ರಥಗಳನ್ನೂ
ಸಂಗ್ರಹಿಸಲು ಪ್ರಾರಂಭಿಸಿ ಒಂದು ಸಾವಿರದ ನಾನೂರು
ರಥಗಳನ್ನೂ ಹನ್ನೆರಡು ಸಾವಿರ ರಾಹುತರನ್ನೂ ತನ್ನ
ಸೈನ್ಯಕ್ಕೆ ಕೂಡಿಸಿಕೊಂಡನು. ಅವುಗಳನ್ನು ರಥಗಳನ್ನಿಡುವ
ನಗರಗಳಲ್ಲಿ ಇರಿಸಿದನು. ಅದರಲ್ಲಿ ಕೆಲವನ್ನು ತನ್ನ
ಅರಮನೆಯಿರುವ ಜೆರುಸಲೇಮಿನಲ್ಲಿ ಇರಿಸಿದನು.
15ಜೆರುಸಲೇಮಿನಲ್ಲಿ ಸೊಲೊಮೋನನು ಅಪಾರವಾದ
ಬೆಳ್ಳಿಬಂಗಾರಗಳನ್ನು ಶೇಖರಿಸಿಟ್ಟಿದ್ದನು. ಭೂಮಿಯ

ಮೇಲೆ ಕಲ್ಲುಗಳು ಹೇಗಿರುತ್ತವೋ ಅದೇ ರೀತಿಯಲ್ಲಿ
ಅವನಲ್ಲಿ ಬೆಳ್ಳಿಬಂಗಾರಗಳಿದ್ದವು. ದೇವದಾರು ಮರ
ಗಳನ್ನೂ ಸೊಲೊಮೋನನು ಶೇಖರಿಸಿಟ್ಟನು. ಪಶ್ಚಿಮದ
ಬೆಟ್ಟ ಪ್ರದೇಶಗಳಲ್ಲಿ ಜಾಲಿಮರಗಳು ಹೇರಳವಾಗಿರು
ವಂತೆ ದೇವದಾರುಮರಗಳೂ ಹೇರಳವಾಗಿದ್ದವು.
16ಈಜಿಪ್ಟ್ ಮತ್ತು ಕ್ಯೂ ದೇಶಗಳಿಂದ ಸೊಲೊಮೋನನು
ಕುದುರೆಗಳನ್ನು ತನ್ನ ವ್ಯಾಪಾರಸ್ಥರ ಮೂಲಕ ಖರೀದಿ
ಮಾಡಿದನು. 17ಸೊಲೊಮೋನನ ವ್ಯಾಪಾರಿಗಳು ಈಜಿಪ್ಟಿ
ನಲ್ಲಿ ಒಂದೊಂದು ರಥಕ್ಕೆ ಏಳು ಕಿಲೋ.ಗ್ರಾಂ. ತೂಕದ
ಬೆಳ್ಳಿಯನ್ನೂ ಒಂದೊಂದು ಕುದುರೆಗೆ ಎರಡು ಕಿಲೋ.
ಗ್ರಾಂ ತೂಕದ ಬೆಳ್ಳಿಯನ್ನೂ ಕೊಟ್ಟು ಖರೀದಿಸಿ ಅವು
ಗಳನ್ನು ಹಿತ್ತಿಯರ ಅರಸರಿಗೂ ಅರಾಮ್ಯರ ಅರಸರಿಗೂ
ಮಾರಿದರು.

### ದೇವಾಲಯವನ್ನು ಕಟ್ಟಲು ಸೊಲೊಮೋನನ ಸಿದ್ಧತೆ

2 ದೇವಾಲಯವನ್ನು ಕಟ್ಟಿ ದೇವರಿಗೆ ಘನತೆಯನ್ನು
ಸಲ್ಲಿಸಲು ಸೊಲೊಮೋನನು ಯೋಜಿಸಿದನು.
ಮಾತ್ರವಲ್ಲದೆ ತನಗೆ ವಾಸಿಸಲು ಒಂದು ಅರಮನೆಯನ್ನು
ಕಟ್ಟಲೂ ಸಿದ್ಧತೆ ಮಾಡಿದನು. 2ಅದಕ್ಕಾಗಿ ಎಪ್ಪತ್ತು ಸಾವಿರ
ಮಂದಿ ಕೆಲಸಗಾರರನ್ನೂ ಎಂಭತ್ತು ಸಾವಿರ ಮಂದಿ
ಕಲ್ಲುಕುಟಿಕರನ್ನೂ ಬೆಟ್ಟದ ಮೇಲೆ ನಡಿಯುತ್ತಿರುವ
ಕಲ್ಲಿನ ಕೆಲಸಕ್ಕಾಗಿ ಮೂರುಸಾವಿರದ ಆರುನೂರು
ಮಂದಿ ಮೇಸ್ತ್ರಿಗಳನ್ನೂ ನೇಮಿಸಿದನು.

3ಸೊಲೊಮೋನನು ತನ್ನ ಸ್ನೇಹಿತನೂ ತೂರ್ ದೇಶದ
ರಾಜನೂ ಆದ ಹೂರಾಮನಿಗೆ ಹೀಗೆ ಬರೆದು ಕಳುಹಿ
ಸಿದನು: ''ನನ್ನ ತಂದೆಯಾದ ದಾವೀದನ ಅರಮನೆಗೆ
ಬೇಕಾದ ದೇವದಾರುಮರಗಳನ್ನು ನೀನು ಒದಗಿಸಿ
ದಂತೆಯೇ ನನಗೂ ನೀನು ಸಹಾಯ ಮಾಡಬೇಕು. 4ನನ್ನ
ದೇವರಾದ ಯೆಹೋವನ ನಾಮದ ಘನತೆಗಾಗಿ ನಾನು
ಒಂದು ದೇವಾಲಯವನ್ನು ಕಟ್ಟಲಿರುವೆನು. ಆತನ
ಸನ್ನಿಧಿಯಲ್ಲಿ ನಿತ್ಯವೂ ಧೂಪವನ್ನು ಹಾಕುವೆವು; ವಿಶೇಷ
ಮೇಜಿನ ಮೇಲೆ ಪವಿತ್ರವಾದ ರೊಟ್ಟಿಗಳನ್ನಿಡುವೆವು. ಪ್ರತಿ
ಮುಂಜಾನೆ ಮತ್ತು ಸಾಯಂಕಾಲಗಳಲ್ಲಿ, ಸಬ್ಬತ್ ದಿನ
ಗಳಲ್ಲಿ ಮತ್ತು ಅಮಾವಾಸ್ಯೆದಿನಗಳಲ್ಲಿ ಯೆಹೋವನು
ಆಜ್ಞಾಪಿಸಿದ ಹಬ್ಬಗಳಲ್ಲಿ ಸರ್ವಾಂಗಹೋಮಗಳನ್ನು
ಸಮರ್ಪಿಸುವೆವು. ಇಸ್ರೇಲಿನ ಜನರು ನಿತ್ಯಾಕಾಲಕ್ಕೂ
ಇವುಗಳನ್ನು ಅನುಸರಿಸಬೇಕೆಂದು ದೇವರು
ನೇಮಿಸಿರುತ್ತಾನೆ.

5''ನಮ್ಮ ದೇವರು ಎಲ್ಲಾ ದೇವರುಗಳಿಗಿಂತ ದೊಡ್ಡ
ವನು. ಆದುದರಿಂದ ಆತನಿಗಾಗಿ ನಾನು ಮಹತ್ತಾದ
ಆಲಯವನ್ನು ಕಟ್ಟುವೆನು. 6ಯಾವನೂ ದೇವರಿಗೆ
ಆಲಯವನ್ನು ಕಟ್ಟಲು ಸಾಧ್ಯವಿಲ್ಲ. ಯಾಕಂದರೆ,
ಆಕಾಶವಾಗಲೀ ಇಡೀ ವಿಶ್ವವಾಗಲೀ ಆತನ ವಾಸಕ್ಕೆ
ಸಾಲುವುದಿಲ್ಲ. ಆದ್ದರಿಂದ ನಾನು ಆತನಿಗೆ ಆಲಯವನ್ನು
ಕಟ್ಟಲಾರೆ. ನಾನು ಆತನಿಗೆ ಆಲಯವನ್ನು ಕಟ್ಟು
ತ್ತಿರುವುದು ಧೂಪಹಾಕಿ ಆತನನ್ನು ಘನಪಡಿಸುವದ
ಕ್ಕಾಗಿಯಷ್ಟೇ.

7''ಚಿನ್ನ, ಬೆಳ್ಳಿ, ತಾಮ್ರ, ಕಬ್ಬಿಣ ಇವುಗಳ ಕೆಲಸಗಳಲ್ಲಿ
ಪಳಗಿರುವ ಒಬ್ಬ ಕುಶಲಕರ್ಮಿಯನ್ನು ನೀನು ಕಳುಹಿಸಿ
ಕೊಡಬೇಕು. ಅವನಿಗೆ ನೀಲಿ, ಕೆಂಪು, ನೇರಳೆ, ವರ್ಣಗಳ
ಬಟ್ಟೆಗಳನ್ನು ನೇಯುವುದೂ ಗೊತ್ತಿರಬೇಕು. ನನ್ನ ತಂದೆ
ಆರಿಸಿಕೊಂಡಿರುವ ಕುಶಲಕರ್ಮಿಗಳ ಜೊತೆಯಲ್ಲಿ
ಅವನು ಜೆರುಸಲೇಮಿನಲ್ಲಿಯೂ ಯೆಹೂದದಲ್ಲಿಯೂ
ಕೆಲಸ ಮಾಡಬೇಕು. 8ಅಲ್ಲದೆ ನನಗೆ ಲೆಬನೋನಿನಿಂದ
ದೇವದಾರು, ತುರಾಯಿ ಮತ್ತು ಸುಗಂಧಮರಗಳನ್ನು
ಕಳುಹಿಸಿಕೊಡು. ನಿನ್ನ ಸೇವಕರು ಲೆಬನೋನಿನ ಮರ
ಗಳನ್ನು ಕತ್ತರಿಸುವುದರಲ್ಲಿ ನಿಪುಣರೆಂಬುದು ನನಗೆ
ಗೊತ್ತಿದೆ. ನಿನ್ನ ಅನುಭವಸ್ಥ ಸೇವಕರಿಗೆ ಸಹಾಯ
ಮಾಡಲು ನನ್ನ ಸೇವಕರೂ ಬರುವರು. 9ನಾನು ಕಟ್ಟುವ
ಆಲಯವು ದೊಡ್ಡದಾಗಿಯೂ ಅಂದವಾಗಿಯೂ
ಇರುವದರಿಂದ ನನಗೆ ಬಹಳ ಮರ ಬೇಕಾಗುತ್ತದೆ. 10ನಿನ್ನ
ಜನರು ಮರಗಳನ್ನು ಕಡಿದು ಸಾಗಿಸುವ ಕಾರ್ಯಕ್ಕೆ ನಾನು
ಒಂದು ಲಕ್ಷದ ಇಪ್ಪತ್ತೈದು ಸಾವಿರ ಕ್ವಿಂಟಾಲ್ ಗೋಧಿ
ಯನ್ನೂ ಒಂದು ಲಕ್ಷದ ಇಪ್ಪತ್ತೈದು ಸಾವಿರ ಕ್ವಿಂಟಾಲ್
ಜವೆಗೋದಿಯನ್ನೂ ಒಂದು ಲಕ್ಷದ ಹದಿನೈದು ಸಾವಿರ
ಲೀಟರ್ ದ್ರಾಕ್ಷಾರಸವನ್ನೂ ಒಂದು ಲಕ್ಷದ ಹದಿನೈದು
ಸಾವಿರ ಲೀಟರ್ ಎಣ್ಣೆಯನ್ನೂ ಕೊಡುವೆನು.''

11ಅದಕ್ಕೆ ಹೂರಾಮನು ಸೊಲೊಮೋನನಿಗೆ ಪತ್ರದ
ಮೂಲಕ ಹೀಗೆ ಉತ್ತರಿಸಿದನು,''ಸೊಲೊಮೋನನೇ,
ಯೆಹೋವನು ತನ್ನ ಜನರನ್ನು ಪ್ರೀತಿಸುತ್ತಾನೆ. ಆದು
ದರಿಂದಲೇ ನಿನ್ನನ್ನು ಅವರ ಅರಸನನ್ನಾಗಿ ಆರಿಸಿ
ಕೊಂಡಿರುತ್ತಾನೆ.

12''ಇಸ್ರೇಲರ ದೇವರಾದ ಯೆಹೋವನಿಗೆ ಸ್ತೋತ್ರ
ವಾಗಲಿ, ಆತನು ಭೂಪರಲೋಕಗಳನ್ನು ಉಂಟು
ಮಾಡಿದನು. ಅರಸನಾದ ದಾವೀದನಿಗೆ ಒಬ್ಬ ಜ್ಞಾನವುಳ್ಳ
ಮಗನನ್ನು ಅನುಗ್ರಹಿಸಿದ್ದಾನೆ. ನಿನಗೆ ಜ್ಞಾನವೂ
ತಿಳುವಳಿಕೆಯೂ ಇರುವದರಿಂದ ನೀನು ದೇವಾಲಯ
ವನ್ನು ಕಟ್ಟುವೆ ಮತ್ತು ನಿನಗೂ ಒಂದು ಅರಮನೆಯನ್ನೂ
ಕಟ್ಟುವೆ. 13ನಾನು ಹೂರಾಮಾಬೀ ಎಂಬ ಹೆಸರಿನ ಅನು
ಭವಶಾಲಿಯಾದ ಕುಶಲಕರ್ಮಿಯನ್ನು ನಿನಗೋಸ್ಕರ
ಕಳುಹಿಸುತ್ತೇನೆ. 14ಅವನ ತಾಯಿಯು ದಾನ್ ಕುಟುಂಬ
ದವಳು, ತಂದೆಯು ತೂರ್ ಪಟ್ಟಣದವನು. ಅವನು ಬೆಳ್ಳಿ,
ಬಂಗಾರ, ತಾಮ್ರ, ಕಬ್ಬಿಣ ಮರ ಇವುಗಳ ಕೆಲಸಗಳಲ್ಲಿ
ತುಂಬ ಚತುರನು. ಅಲ್ಲದೆ ನೀಲಿ, ಕೆಂಪು ಧೂಮ್ರ
ವರ್ಣದ ಬಟ್ಟೆಗಳನ್ನು ಮತ್ತು ಬೆಲೆಬಾಳುವ ಲಿನಿನ್
ಬಟ್ಟೆಗಳನ್ನು ನೇಯುವುದರಲ್ಲಿ ನಿಪುಣನಾಗಿದ್ದಾನೆ.

ನೀನು ಏನೇ ಹೇಳಿದರೂ ಅವನು ಮಾಡಿಕೊಡುವನು.
ನಿನ್ನ ಮತ್ತು ದಾವೀದನ ಕುಶಲಕರ್ಮಿಗಳ ಜೊತೆಯಲ್ಲಿ
ಅವನು ಕೆಲಸ ಮಾಡುವನು.

15‘‘ನೀನು ನನ್ನ ಸೇವಕರಿಗೆ ಆಹಾರವನ್ನೂ ದ್ರಾಕ್ಷಾ
ರಸವನ್ನೂ ಎಣ್ಣೆಯನ್ನೂ ಕೊಡುವ ಭರವಸೆ ನೀಡಿರುವೆ.
ಆದ್ದರಿಂದ ದಯವಿಟ್ಟು ಇವುಗಳನ್ನು ಒದಗಿಸಿಕೊಡು.
16ನಾವು ಲೆಬನೋನಿನಲ್ಲಿ ನಿನಗೆ ಬೇಕಾದಷ್ಟು
ಮರಗಳನ್ನು ಕಡಿದು ಅವುಗಳನ್ನು ಜೋಡಿಸಿ ತೆಪ್ಪಗಳ
ನ್ನಾಗಿ ಮಾಡಿ ಸಮುದ್ರದಲ್ಲಿ ತೇಲಿಬಿಡುವೆವು. ಅವು
ಯೊಪ್ಪಕ್ಕೆ ತಲುಪಿದಾಗ ನೀನು ಅವುಗಳನ್ನು ಶೇಖರಿಸಿ
ಬೇಕಾದ ಕಡೆಗೆ ರವಾನಿಸು.’’

17ಸೊಲೊಮೋನನು ತನ್ನ ರಾಜ್ಯದಲ್ಲಿದ್ದ ಎಲ್ಲಾ
ಪರದೇಶಸ್ಥರನ್ನು ಲೆಕ್ಕಿಸಿದನು. ಸೊಲೊಮೋನನ ತಂದೆ
ಯಾದ ದಾವೀದನು ಮಾಡಿದ ಜನಗಣತಿಯನಂತರ ಈ
ಜನಗಣತಿಯನ್ನು ಮಾಡಲಾಯಿತು. ಅವರಲ್ಲಿ ಒಂದು
ಲಕ್ಷದ ಐವತ್ತ ಮೂರು ಸಾವಿರದ ಆರುನೂರು ಮಂದಿ
ಪರದೇಶದವರಿದ್ದರು. ಅವರಲ್ಲಿ ಎಪ್ಪತ್ತು ಸಾವಿರ ಮಂದಿ
ಯನ್ನು ಸೊಲೊಮೋನನು ಹೊರೆಹೊರುವದಕ್ಕಾಗಿ
ನೇಮಿಸಿದನು; ಎಂಭತ್ತು ಸಾವಿರ ಮಂದಿಯನ್ನು ಬೆಟ್ಟ
ಗಳಲ್ಲಿ ಕಲ್ಲಿನ ಕೆಲಸಮಾಡಲು ನೇಮಿಸಿದನು; ಮೂರು
ಸಾವಿರದ ಆರುನೂರು ಮಂದಿಯನ್ನು ಕಾರ್ಮಿಕರ
ಮೇಲ್ವಿಚಾರಣೆಗೋಸ್ಕರ ನೇಮಿಸಿದನು.

## ಸೊಲೊಮೋನನು ದೇವಾಲಯವನ್ನು ಕಟ್ಟಿದನು

3 ಜೆರುಸಲೇಮಿನಲ್ಲಿರುವ ಮೊರೀಯಾ ಬೆಟ್ಟದ ಮೇಲೆ
ಸೊಲೊಮೋನನು ದೇವಾಲಯವನ್ನು ಕಟ್ಟಲು
ಪ್ರಾರಂಭಿಸಿದನು. ಅದೇ ಸ್ಥಳದಲ್ಲಿ ಸೊಲೊಮೋನನ
ತಂದೆಯಾದ ದಾವೀದನಿಗೆ ಯೆಹೋವನು ದರ್ಶನ
ಕೊಟ್ಟಿದ್ದನು. ಅದು ಯೆಬೂಸಿಯನಾದ ಒರ್ನಾನನ ಕಣ
ವಾಗಿತ್ತು. ಆಲಯವನ್ನು ಕಟ್ಟಲು ದಾವೀದನು ಆ
ಸ್ಥಳವನ್ನು ತಯಾರು ಮಾಡಿದ್ದನು. 2ಸೊಲೊಮೋನನು
ತನ್ನ ರಾಜ್ಯಾಳ್ವಿಕೆಯ ನಾಲ್ಕನೆಯ ವರುಷದ ಎರಡನೆಯ
ತಿಂಗಳಿನಲ್ಲಿ ದೇವಾಲಯದ ಕೆಲಸವನ್ನು
ಪ್ರಾರಂಭಿಸಿದನು.

3ದೇವಾಲಯದ ಅಸ್ತಿವಾರದ ಉದ್ದಳತೆಯು ಹೀಗಿತ್ತು:
ಉದ್ದ ಅರವತ್ತು ಮೊಳ, ಅಗಲ ಇಪ್ಪತ್ತು ಮೊಳ.
ದೇವಾಲಯದ ಅಳತೆಗಾಗಿ ಸೊಲೊಮೋನನು ಹಳೆಯ
ಮೊಳದ ಅಳತೆಯನ್ನು ಉಪಯೋಗಿಸಿದನು. 4ದೇವಾ
ಲಯದ ಮುಂದುಗಡೆಯಿದ್ದ ಮಂಟಪವು ಇಪ್ಪತ್ತು ಮೊಳ
ಉದ್ದ ಮತ್ತು ಇಪ್ಪತ್ತು ಮೊಳ ಎತ್ತರವಿತ್ತು. ಮಂಟಪದ
ಒಳಮೈಯನ್ನು ಸೊಲೊಮೋನನು ಅಪ್ಪಟ ಬಂಗಾರದ
ತಗಡಿನಿಂದ ಹೊದಿಸಿದನು. 5ದೊಡ್ಡ ಕೋಣೆಯ
ಗೋಡೆಗೆ ಸೊಲೊಮೋನನು ತುರಾಯಿ ಮರದ ಹಲಗೆ
ಗಳಿಂದ ಹೊದಿಸಿ ಅದರ ಮೇಲೆ ಬಂಗಾರದ ತಗಡನ್ನು
ಹೊದಿಸಿದನು. ಅದರಲ್ಲಿ ಖರ್ಜೂರ ಮರಗಳೂ ಸರ
ಪಣಿಗಳೂ ಬಂಗಾರದಿಂದ ಮಾಡಲ್ಪಟ್ಟು ಜೋಡಿಸಿದ್ದವು.
6ದೇವಾಲಯವನ್ನು ಬೆಲೆಯುಳ್ಳ ರತ್ನಗಳಿಂದ ಅಲಂಕರಿಸಿ
ದನು. ಸೊಲೊಮೋನನು ಪರ್ವಯಿಮ್ ದೇಶದ
ಬಂಗಾರವನ್ನು ಉಪಯೋಗಿಸಿದನು. 7ದೇವಾಲಯದ
ಗೋಡೆಯ ಒಳಭಾಗವನ್ನು ಸೊಲೊಮೋನನು
ಬಂಗಾರದಿಂದ ಹೊದಿಸಿದನು ಮತ್ತು ಆಲಯದ ತೊಲೆ,
ಹೊಸ್ತಿಲು, ಗೋಡೆ, ಕದ ಇವುಗಳನ್ನೂ ಬಂಗಾರದ ತಗಡಿ
ನಿಂದ ಹೊದಿಸಿ, ಗೋಡೆಗಳ ಮೇಲೆ ಕೆರೂಬಿಗಳ ಚಿತ್ರ
ವನ್ನು ಕೆತ್ತಿಸಿದನು.

8ಸೊಲೊಮೋನನು ಅತ್ಯಂತ ಪವಿತ್ರಸ್ಥಳವನ್ನು
ತಯಾರಿಸಿದನು. ಅದು ಇಪ್ಪತ್ತು ಮೊಳ ಉದ್ದ ಮತ್ತು
ಇಪ್ಪತ್ತು ಮೊಳ ಅಗಲವಿತ್ತು. ದೇವಾಲಯದ ಅಗಲದಷ್ಟೇ
ಅದು ಅಗಲವಿತ್ತು. ಅದರ ಗೋಡೆಗಳನ್ನು ಅಪ್ಪಟ
ಬಂಗಾರದ ತಗಡಿನಿಂದ ಹೊದಿಸಿದನು. ಆ ಬಂಗಾರವು
ಇಪ್ಪತ್ತಮೂರು ಟನ್ ತೂಕವಿತ್ತು. 9ಬಂಗಾರದ ಮೊಳೆ
ಗಳ ತೂಕ ಅರ್ಧ ಕಿಲೋ.ಗ್ರಾಂ. ಸೊಲೊಮೋನನು
ಮೇಲುಪ್ಪರಿಗೆಯ ಕೋಣೆಗಳನ್ನೂ ಬಂಗಾರದಿಂದ
ಹೊದಿಸಿದನು. 10ಸೊಲೊಮೋನನು ಅತ್ಯಂತ ಪವಿತ್ರ
ಸ್ಥಾನದೊಳಗೆ ಇಡುವದಕ್ಕಾಗಿ ಎರಡು ಕೆರೂಬಿಗಳನ್ನು
ಮಾಡಿಸಿ ಅವುಗಳನ್ನು ಬಂಗಾರದ ತಗಡಿನಿಂದ ಹೊದಿಸಿ
ದನು. 11ಕೆರೂಬಿಗಳ ಒಂದೊಂದು ರೆಕ್ಕೆಯು ಐದೈದು
ಮೊಳ ಉದ್ದವಿದ್ದವು. ರೆಕ್ಕೆಗಳ ಒಟ್ಟು ಉದ್ದ ಇಪ್ಪತ್ತು
ಮೊಳ. ಕೆರೂಬಿಯ ಒಂದು ರೆಕ್ಕೆಯು ಗೋಡೆಗೆ ತಾಗಿತ್ತು;
ಅದರ ಇನ್ನೊಂದು ರೆಕ್ಕೆಯು ಮತ್ತೊಂದು ಕೆರೂಬಿಯ
ರೆಕ್ಕೆಯನ್ನು ತಾಗಿತ್ತು. 12ಅಂತೆಯೇ ಎರಡನೆಯ
ಕೆರೂಬಿಯ ಇನ್ನೊಂದು ರೆಕ್ಕೆಯು ಮತ್ತೊಂದು
ಗೋಡೆಗೆ ತಾಗಿತ್ತು. 13ಹೀಗೆ ಕೆರೂಬಿಗಳ ರೆಕ್ಕೆಗಳು
ಇಪ್ಪತ್ತು ಮೊಳ ಸ್ಥಳವನ್ನು ಆವರಿಸಿಕೊಂಡಿದ್ದವು. ಅವು
ಪವಿತ್ರಸ್ಥಳದ ಕಡೆಗೆ ಮುಖಮಾಡಿಕೊಂಡು ನಿಂತಿದ್ದವು.

14ಸೊಲೊಮೋನನು ದೇವಾಲಯಕ್ಕೆ ನೀಲ, ಧೂಮ್ರ
ಮತ್ತು ಕೆಂಪು ಬಟ್ಟೆ ಮತ್ತು ಬೆಲೆಬಾಳುವ ನಾರುಬಟ್ಟೆ
ಗಳಿಂದ ಪರದೆಗಳನ್ನು ತಯಾರಿಸಿ ಅದರ ಮೇಲೆ
ಕೆರೂಬಿಯರ ಚಿತ್ರವನ್ನು ಕಸೂತಿ ಮಾಡಿಸಿದನು.

15ಸೊಲೊಮೋನನು ದೇವಾಲಯದ ಎದುರಿನಲ್ಲಿ
ಮೂವತ್ತೈದು ಮೊಳ ಎತ್ತರದ ಎರಡು ಕಂಬಗಳನ್ನು
ನಿಲ್ಲಿಸಿದನು. ಅದರ ಮೇಲಿನ ಭಾಗ ಐದು ಮೊಳ ಎತ್ತರ
ವಿತ್ತು. 16ಅವನು ಕೊರಳಿನ ಸರಗಳನ್ನು ಮಾಡಿಸಿ ಅವು
ಗಳನ್ನು ಕಂಬಗಳ ಮೇಲ್ಭಾಗದಲ್ಲಿ ಸಿಕ್ಕಿಸಿದನು. ಅವನು
ನಾರು ದಾಳಿಂಬೆ ಹಣ್ಣುಗಳನ್ನು ಮಾಡಿಸಿ ತೂಗು
ಹಾಕಿದನು. 17ಈ ಕಂಬಗಳನ್ನು ದೇವಾಲಯದ ಬಲಗಡೆ
ಯಲ್ಲಿಯೂ ಎಡಗಡೆಯಲ್ಲಿಯೂ ನಿಲ್ಲಿಸಿದನು.

ಬಲಗಡೆಯ ಕಂಬಕ್ಕೆ ಯಾಕೀನ್ ಎಂತಲೂ ಎಡಗಡೆಯ
ಕಂಬಕ್ಕೆ ಬೋವಜ್ ಎಂತಲೂ ಹೆಸರಿಟ್ಟನು.

### ದೇವಾಲಯದ ವಸ್ತುಗಳು

4 ಸೊಲೊಮೋನನು ತಾಮ್ರದ ಯಜ್ಞವೇದಿಕೆಯನ್ನು
ಮಾಡಿಸಿದನು. ಅದು ಇಪ್ಪತ್ತು ಮೊಳ ಉದ್ದ; ಇಪ್ಪತ್ತು
ಮೊಳ ಅಗಲ; ಮತ್ತು ಹತ್ತು ಮೊಳ ಎತ್ತರವಿತ್ತು. 2ಅವನು
ಎರಕಹೊಯ್ದ ದೊಡ್ಡ ಗಾತ್ರದ ನೀರಿನ ಪಾತ್ರೆಯನ್ನು
ಮಾಡಿಸಿದನು. ಇದು ದುಂಡಾಕಾರವಾಗಿದ್ದು ಅದರ
ಬಾಯಿಯ ಅಂಚಿನಿಂದ ಅಂಚಿಗೆ ಹತ್ತು ಮೊಳ ಅಗಲ
ವಿತ್ತು; ಅದರ ಸುತ್ತಳತೆ ಮೂವತ್ತು ಮೊಳ; ಎತ್ತರ ಐದು
ಮೊಳ. 3ಆ ನೀರಿನ ಪಾತ್ರೆಯನ್ನು ಎರಕಹೊಯ್ಯುವಾಗ
ಅದರ ಬಾಯಿಯ ಅಂಚಿನ ಕೆಳಗೆ ಸುತ್ತಲೂ ಹೋರಿಯ
ಚಿತ್ರವನ್ನು ಎರಡು ಸಾಲಾಗಿ ಹತ್ತು ಮೊಳ ಎರಕ ಹೊಯ್ದಿ
ದ್ದನು. 4ಆ ಬೃಹದಾಕಾರದ ಪಾತ್ರೆಯನ್ನು ಹನ್ನೆರಡು
ದೊಡ್ಡ ಎರಕದ ಹೋರಿಗಳ ಮೇಲೆ ಇಡಲಾಗಿತ್ತು.
ಇವುಗಳಲ್ಲಿ ಮೂರು ಹೋರಿಗಳು ಪೂರ್ವದ ಕಡೆಗೂ
ಮೂರು ಹೋರಿಗಳು ಪಶ್ಚಿಮದ ಕಡೆಗೊ ಮೂರು
ಹೋರಿಗಳು ಉತ್ತರದ ಕಡೆಗೂ ಮೂರು ಹೋರಿಗಳು
ದಕ್ಷಿಣದ ಕಡೆಗೂ ಮುಖಮಾಡಿ ನಿಂತಿದ್ದವು. ಎಲ್ಲಾ
ಹೋರಿಗಳು ಒಂದಕ್ಕೊಂದಕ್ಕೆ ಮತ್ತು ಮಧ್ಯಭಾಗಕ್ಕೆ
ಹಿಮ್ಮುಖವಾಗಿ ನಿಂತುಕೊಂಡಿದ್ದವು. 5ಈ ತಾಮ್ರದ
ಎರಕದ ಪಾತ್ರೆಯು ಮೂರು ಇಂಚು ದಪ್ಪವಾಗಿತ್ತು.
ಅದರ ಅಂಚು ಕಮಲಾಕಾರದ ಬಟ್ಟಲನ್ನು ಹೋಲು
ತ್ತಿತ್ತು. ಅದರಲ್ಲಿ ಅರವತ್ತಾರು ಸಾವಿರ ಲೀಟರ್ ನೀರನ್ನು
ತುಂಬಬಹುದಾಗಿತ್ತು.

6ಸೊಲೊಮೋನನು ಹತ್ತು ಗಂಗಾಳಗಳನ್ನು ಮಾಡಿಸಿ
ದನು. ಐದು ಗಂಗಾಳಗಳನ್ನು ತಾಮ್ರದ ನೀರಿನ
ತೊಟ್ಟಿಯ ಬಲಗಡೆಯಲ್ಲಿಡಿಸಿದನು. ಉಳಿದ ಐದು
ಗಂಗಾಳಗಳನ್ನು ಪಾತ್ರೆಯ ಎಡಗಡೆಯಲ್ಲಿಡಿಸಿದನು. ಈ
ಗಂಗಾಳಗಳ ನೀರನ್ನು ಯಜ್ಞ ಮಾಡಲಿಕ್ಕಿರುವ ಪದಾರ್ಥ
ಗಳನ್ನು ತೊಳೆಯುವದಕ್ಕಾಗಿ ಉಪಯೋಗಿಸಿದರು.
ಮತ್ತು ಯಾಜಕರು ಯಜ್ಞಗಳನ್ನು ಅರ್ಪಿಸುವ ಮೊದಲು
ತಮ್ಮನ್ನು ಶುದ್ಧ ಮಾಡಿಕೊಳ್ಳುವದಕ್ಕಾಗಿ ದೊಡ್ಡ ತಾಮ್ರದ
ಪಾತ್ರೆಯ ನೀರನ್ನು ಉಪಯೋಗಿಸುತ್ತಿದ್ದರು.

7ಸೊಲೊಮೋನನು ಹತ್ತು ದೀಪಸ್ತಂಭಗಳನ್ನು
ಬಂಗಾರದಿಂದ ಮಾಡಿಸಿದನು. ಮೊದಲೇ ತೋರಿಸಿದ
ಮಾದರಿಯ ಮೇರೆಗೆ ದೀಪಸ್ತಂಭಗಳನ್ನು ಮಾಡಿಸಿದನು.
ಇವುಗಳಲ್ಲಿ ಐದನ್ನು ದೇವಾಲಯದೊಳಗೆ ಬಲಗಡೆ ಯ
ಲ್ಲಿಯೂ ಐದು ದೀಪಸ್ತಂಭಗಳನ್ನು ಎಡಗಡೆಯಲ್ಲಿಯೂ
ಇಡಿಸಿದನು. 8ಅವನು ಹತ್ತು ಮೇಜುಗಳನ್ನು ಮಾಡಿಸಿ
ಅವುಗಳಲ್ಲಿ ಐದನ್ನು ದೇವಾಲಯದ ಬಲಗಡೆಯ
ಲ್ಲಿಯೂ ಉಳಿದ ಐದನ್ನು ಎಡಗಡೆಯಲ್ಲಿಯೂ ಇರಿಸಿ
ದನು. ಅನಂತರ ಸೊಲೊಮೋನನು ನೂರು ಬಂಗಾರದ
ಬೋಗುಣಿಗಳನ್ನು* ಮಾಡಿಸಿದನು. 9ಇದಲ್ಲದೆ ಸೊಲೊ
ಮೋನನು ಯಾಜಕರ ಅಂಗಳವನ್ನೂ ಮಹಾ ಅಂಗಳ
ವನ್ನೂ ಸಿದ್ಧಪಡಿಸಿದನು. ಅವುಗಳ ಕದಗಳನ್ನು ತಾಮ್ರ
ದಿಂದ ಹೊದಿಸಲಾಗಿದ್ದವು. 10ಅವನು ಆ ದೊಡ್ಡ ನೀರಿನ
ಪಾತ್ರೆಯನ್ನು ದೇವಾಲಯದ ಬಲ ಬದಿಯಲ್ಲಿ ಆಗ್ನೇಯ
ದಿಕ್ಕಿನಲ್ಲಿ ಇರಿಸಿದನು.

11ಹೂರಾಮನು ಪಾತ್ರೆಗಳನ್ನೂ ಸಲಿಕೆಗಳನ್ನೂ
ಬೋಗುಣಿಗಳನ್ನೂ ಮತ್ತು ದೇವಾಲಯದ ಉಪರಕರಣ
ಗಳನ್ನೂ ಸೊಲೊಮೋನನು ಹೇಳಿದಂತೆಯೇ ಮಾಡಿ
ಮುಗಿಸಿದನು. 12ಹೂರಾಮನು ದೇವಾಲದ ಎದುರಿ
ನಲ್ಲಿಟ್ಟಿದ್ದ ಎತ್ತರದ ಕಂಬಗಳನ್ನೂ ಅವುಗಳ ತುತ್ತತುದಿ
ಯಲ್ಲಿ ಎರಡು ಬೋಗುಣಿಗಳನ್ನೂ ಮಾಡಿಸಿದನು. ಆ
ಬೋಗುಣಿಗಳಿಗೆ ಅಲಂಕೃತವಾದ ಜಾಲರಿಗಳನ್ನು
ಹೊದಿಸಿದನು. 13ಆ ಜಾಲರಿಯಲ್ಲಿ ಸಿಕ್ಕಿಸಲು ನಾನೂರು
ದಾಳಿಂಬೆಗಳನ್ನು ಮಾಡಿದನು. ಪ್ರತಿಯೊಂದು ಜಾಲರಿ
ಯಲ್ಲಿ ಎರಡು ಸಾಲಾಗಿ ದಾಳಿಂಬೆಗಳನ್ನು ಸಿಕ್ಕಿಸಿಟ್ಟನು.
ಈ ಜಾಲರಿಯು ಕಂಬದ ಮೇಲ್ಭಾಗವನ್ನು ಮುಚ್ಚಿತ್ತು.
14ಹೂರಾಮನು ಪೀಠಗಳನ್ನೂ ಅವುಗಳ ಮೇಲೆ
ಬೋಗುಣಿಗಳನ್ನೂ ಮಾಡಿದನು. 15ಎರಕಹೊಯ್ದ
ತಾಮ್ರದ ದೊಡ್ಡ ಪಾತ್ರೆಯನ್ನೂ ಅದರ ಕೆಳಗೆ ಹೋರಿ
ಗಳನ್ನೂ ತಯಾರಿಸಿದನು. 16ಹಂಡೆ, ಸಲಿಕೆ, ಮುಳ್ಳು ಇವು
ಗಳನ್ನೆಲ್ಲಾ ದೇವಾಲಯಕ್ಕಾಗಿ ಸೊಲೊಮೋನನು ಹೇಳಿ
ದಂತೆಯೇ ಮಾಡಿದನು. ಇವೆಲ್ಲವನ್ನು ಹೊಳೆಯುವ
ತಾಮ್ರದಿಂದ ಮಾಡಿದನು. 17ರಾಜನಾದ ಸೊಲೊ-
ಮೋನನು ಈ ಉಪಕರಣಗಳನ್ನೆಲ್ಲಾ ಮೊದಲು
ಜೋರ್ಡನ್ ತಗ್ಗಿನ ಸುಕ್ಕೋತ್ ಮತ್ತು ಚೆರೇದ ಸ್ಥಳ
ಗಳಲ್ಲಿ ದೂರಕುವ ಆವೆ ಮಣ್ಣಿನಿಂದ ಆಕಾರಗಳನ್ನು
ಸಿದ್ಧಪಡಿಸಿ ಅದಕ್ಕೆ ಎರಕ ಹೊಯಿಸಿದನು. 18ಸೊಲೊ-
ಮೋನನು ತಾಮ್ರದಿಂದ ಮಾಡಿಸಿದ ಉಪಕರಣಗಳ
ತೂಕಕ್ಕೆ ಲೆಕ್ಕವೇ ಇರಲಿಲ್ಲ.

19ಸೊಲೊಮೋನನು ದೇವಾಲಯದೊಳಗೆ ಉಪ
ಯೋಗಿಸುವ ಉಪಕರಣಗಳನ್ನು ಮಾಡಿಸಿದನು. ಅವನು
ಬಂಗಾರದ ಯಜ್ಞವೇದಿಕೆಯನ್ನು ಮಾಡಿಸಿದನು;
ನೈವೇದ್ಯದ ರೊಟ್ಟಿಗಳನ್ನು ಇಡಲು ಮೇಜುಗಳನ್ನು
ಮಾಡಿಸಿದನು; 20ಅಪ್ಪಟ ಬಂಗಾರದಿಂದ ದೀಪಸ್ತಂಭ
ಗಳನ್ನೂ ದೀಪಗಳನ್ನೂ ಮಾಡಿಸಿದನು. ಈ ದೀಪ ಸ್ತಂಭ
ಗಳು ಪವಿತ್ರ ಸ್ಥಳದ ಎದುರಿನಲ್ಲಿ ನೇಮಕವಾದ ರೀತಿ
ಯಲ್ಲಿ ಉರಿಯಬೇಕು. 21ಸೊಲೊಮೋನನು ಹಣತೆ,
ಹೂವು, ಅಗ್ಗಿಷ್ಟಿಕೆ ಇವುಗಳನ್ನು ಅಪ್ಪಟ್ಟ ಬಂಗಾರದಿಂದ

---

**ಬೋಗುಣಿ** ರಕ್ತವನ್ನು ಚಿಮುಕಿಸುವುದಕ್ಕಾಗಿ ಇದನ್ನು ಉಪಯೋಗಿಸ
ಲಾಗುತ್ತಿತ್ತು.

ಮಾಡಿಸಿದನು; 22ಕತ್ತರಿ, ಬೋಗುಣಿ, ಧೂಪಾರತಿ,
ಅಗ್ಗಿಷ್ಟಿಕೆ, ದೇವಾಲಯದ ಮಹಾಪವಿತ್ರ ಸ್ಥಳದೊಳಗಣ
ಬಾಗಿಲಿನ ಕದಗಳು; ಅಂಗಳದ ಕದಗಳು ಇವುಗಳನ್ನೆಲ್ಲಾ
ಅಪ್ಪಟ ಬಂಗಾರದಿಂದ ಮಾಡಿಸಿದನು.

5 ಯೆಹೋವದೇವರ ಆಲಯಕ್ಕೆ ಸೊಲೊಮೋನನು
ಮಾಡಬೇಕಾಗಿದ್ದ ಕೆಲಸವೆಲ್ಲವೂ ಮುಗಿಯಿತು.
ದಾವೀದನು ದೇವಾಲಯಕ್ಕಾಗಿ ಕೊಟ್ಟಿದ್ದ ವಸ್ತುಗಳ
ನ್ನೆಲ್ಲಾ ಸೊಲೊಮೋನನು ತಂದಿರಿಸಿದನು; ಬೆಳ್ಳಿಬಂಗಾರ
ಗಳಿಂದ ಮಾಡಿದ ಸಾಮಾನುಗಳನ್ನು ಸೊಲೊಮೋನನು
ದೇವಾಲಯದ ಭಂಡಾರದ ಕೋಣೆಗಳಲ್ಲಿ ಇಡಿಸಿದನು.

### ದೇವಾಲಯಕ್ಕೆ ಪವಿತ್ರ ಪೆಟ್ಟಿಗೆಯ ಆಗಮನ

2ದಾವೀದನಗರದಲ್ಲಿದ್ದ ಅಂದರೆ ಚೀಯೋನಿನಲ್ಲಿದ್ದ
ಒಡಂಬಡಿಕೆಯ ಪೆಟ್ಟಿಗೆಯನ್ನು ತರುವದಕ್ಕಾಗಿ ಸೊಲೊ-
ಮೋನನು ಇಸ್ರೇಲರ ಎಲ್ಲಾ ಹಿರಿಯರನ್ನು ಮತ್ತು ಕುಲಾ
ಧಿಪತಿಗಳನ್ನು ಜೆರುಸಲೇಮಿಗೆ ಒಟ್ಟಾಗಿ ಕರೆಸಿದನು.
3ಪರ್ಣಶಾಲೆಗಳ ಹಬ್ಬದ ದಿವಸ ಇಸ್ರೇಲರೆಲ್ಲರೂ ಅರಸ
ನಾದ ಸೊಲೊಮೋನನ ಮುಂದೆ ಸೇರಿಬಂದರು. ಈ
ಹಬ್ಬವು ವರ್ಷದ ಏಳನೆಯ ತಿಂಗಳಲ್ಲಿ ನಡೆಯಿತು.
4ಇಸ್ರೇಲಿನ ಹಿರಿಯರೆಲ್ಲರೂ ಒಟ್ಟಾಗಿ ಸೇರಿಬಂದಾಗ
ಲೇವಿಯರು ಯೆಹೋವನ ಒಡಂಬಡಿಕೆಯ ಪೆಟ್ಟಿಗೆ
ಯನ್ನು ಹೊತ್ತುಕೊಂಡು ಜೆರುಸಲೇಮಿಗೆ ತಂದರು.
5ಯಾಜಕರೂ ಲೇವಿಯರೂ ಗುಡಾರವನ್ನು ಅದರ
ಪವಿತ್ರ ವಸ್ತುಗಳನ್ನು ಹೊತ್ತು ಜೆರುಸಲೇಮಿಗೆ ತಂದರು.
6ಸೊಲೊಮೋನನು ಮತ್ತು ಇಸ್ರೇಲರೆಲ್ಲರೂ ಆ
ಒಡಂಬಡಿಕೆಯ ಪೆಟ್ಟಿಗೆಯ ಮುಂದೆ ನೆರೆದು ಬಂದರು.
ಸೊಲೊಮೋನನು ಮತ್ತು ಎಲ್ಲಾ ಇಸ್ರೇಲರೂ ಲೆಕ್ಕವಿಲ್ಲ
ದಷ್ಟು ಕುರಿಗಳನ್ನೂ ಹೋರಿಗಳನ್ನೂ ಯಜ್ಞಮಾಡಿದರು.
7ಆಮೇಲೆ ಯಾಜಕರು ಒಡಂಬಡಿಕೆಯ ಪೆಟ್ಟಿಗೆಯನ್ನು
ಅದಕ್ಕಾಗಿ ಮಾಡಿದ್ದ ಅತಿ ಪರಿಶುದ್ಧಸ್ಥಳದ ಕೆರೂಬಿಗಳ
ರೆಕ್ಕೆಗಳ ಕೆಳಗೆ ಇಟ್ಟರು. 8ಕೆರೂಬಿಗಳ ರೆಕ್ಕೆಗಳು
ಒಡಂಬಡಿಕೆಯ ಪೆಟ್ಟಿಗೆಯ ಮೇಲೆ ಚಾಚಿಕೊಂಡಿದ್ದವು.
ಕೆರೂಬಿಗಳು ಆ ಪೆಟ್ಟಿಗೆಯ ಮೇಲೆಯೂ ಪೆಟ್ಟಿಗೆಯನ್ನು
ಹೊತ್ತುಕೊಂಡು ಹೋಗಲು ಉಪಯೋಗಿಸುತ್ತಿದ್ದ ಕಂಬ
ಗಳ ಮೇಲೆಯೂ ನಿಂತುಕೊಂಡಿದ್ದವು. 9ಆ ಪೆಟ್ಟಿಗೆಯನ್ನು
ಹೊರಲು ಜೋಡಿಸಿದ್ದ ಕೋಲುಗಳು ಉದ್ದವಾಗಿದ್ದ
ಕಾರಣ ಅದರ ಕೊನೆಗಳು ಅತಿಪರಿಶುದ್ಧಸ್ಥಳದ
ಮುಂಭಾಗದಲ್ಲಿ ಕಾಣುತ್ತಿದ್ದವು. ಆದರೆ ದೇವಾಲಯದ
ಹೊರಗಿನಿಂದ ಆ ಕೋಲುಗಳು ಯಾರಿಗೂ ಕಾಣುತ್ತಿರ
ಲಿಲ್ಲ. ಇಂದಿಗೂ ಆ ಕೋಲುಗಳು ಅಲ್ಲಿಯೇ ಅವೆ.
10ಒಡಂಬಡಿಕೆಯ ಪೆಟ್ಟಿಗೆಯೊಳಗೆ ಎರಡು ಕಲ್ಲಿನ
ಹಲಗೆಗಳು ಮಾತ್ರ ಇದ್ದವು. ಹೋರೇಬ್ ಬೆಟ್ಟದಲ್ಲಿ
ಮೋಶೆಯು ಈ ಕಲ್ಲಿನ ಹಲಗೆಗಳನ್ನು ಪೆಟ್ಟಿಗೆಯೊಳ
ಗಿಟ್ಟನು. ಆ ಬೆಟ್ಟದಲ್ಲಿ ಯೆಹೋವನು ಈಜಿಪ್ಟಿನಿಂದ
ಬಿಡುಗಡೆ ಹೊಂದಿದ ಇಸ್ರೇಲರೊಂದಿಗೆ ಒಡಂಬಡಿಕೆ
ಯನ್ನು ಮಾಡಿಕೊಂಡನು.

11ಅಲ್ಲಿ ನೆರೆದುಬಂದಿದ್ದ ಯಾಜಕರೆಲ್ಲರೂ ಯಾವ
ವರ್ಗ ವ್ಯತ್ಯಾಸವಿಲ್ಲದೆ ಆಚಾರಕ್ಕನುಸಾರವಾಗಿ ತಮ್ಮನ್ನು
ಶುದ್ಧೀಕರಿಸಿಕೊಂಡರು. ಬಳಿಕ ಅವರು ಪವಿತ್ರ ಸ್ಥಳದಿಂದ
ಹೊರಬಂದು ಒಟ್ಟಾಗಿ ನಿಂತುಕೊಂಡರು. 12ಯಜ್ಞ
ವೇದಿಕೆಯ ಪೂರ್ವಭಾಗದಲ್ಲಿ ಲೇವಿಯರ ಗಾಯಕರು
ನಿಂತರು. ಆಸಾಫನ, ಹೇಮಾನನ ಮತ್ತು ಯೆದುತೂನನ
ಗಾಯಕ ವೃಂದದವರೆಲ್ಲರೂ ಅಲ್ಲಿ ಇದ್ದರು. ಅವರ
ಗಂಡುಮಕ್ಕಳೂ ಕುಟುಂಬದವರೂ ಅಲ್ಲಿದ್ದರು.
ಗಾಯಕರೆಲ್ಲರೂ ಬಿಳೀ ನಾರುಮಡಿಯ ಬಟ್ಟೆಗಳನ್ನು
ಉಟ್ಟಿದ್ದರು. ತಾಳ, ತಂತಿವಾದ್ಯಗಳನ್ನು ಹಿಡಿದುಕೊಂಡಿ
ದ್ದರು. ಗಾಯಕರೊಂದಿಗೆ ನೂರಿಪ್ಪತ್ತು ಮಂದಿ ಯಾಜ
ಕರು ತುತ್ತೂರಿಯನ್ನೂದಿದರು. 13ಗಾಯಕರ ಸ್ವರವೂ
ತುತ್ತೂರಿಗಳ ಶಬ್ದವೂ ಒಬ್ಬನದೆಯೋ ಎಂಬಂತೆ
ತೋರಿಬಂತು. ಅವರು ದೇವರನ್ನು ಸ್ತುತಿಸಿ ಕೊಂಡಾಡಿ
ದಾಗ ಒಂದೇ ಶಬ್ದವು ಹೊರಟಿತು. ಅವರು ತಮ್ಮ ತಾಳ,
ತಂತಿವಾದ್ಯಗಳನ್ನು ಗಟ್ಟಿಯಾಗಿ ಬಾರಿಸಿದರು. ‘‘ದೇವರಿಗೆ
ಸ್ತೋತ್ರವಾಗಲಿ; ಆತನು ಒಳ್ಳೆಯವನು; ಆತನ ಪ್ರೀತಿಯು
ಶಾಶ್ವತವಾದದ್ದು’’ ಎಂದು ಗಾಯಕರು ಹಾಡಿದರು.

ಆಗ ದೇವಾಲಯವು ಯೆಹೋವನ ತೇಜಸ್ಸಿನಿಂದ
ಕೂಡಿದ ಮೋಡದಿಂದ ತುಂಬಿಹೋಯಿತು. 14ಆಗ
ಯಾಜಕರು ನಿಂತುಕೊಂಡು ಸೇವೆಯನ್ನು ಮಾಡಲಾಗ
ಲಿಲ್ಲ. ಯಾಕಂದರೆ ದೇವರ ಮಹಿಮೆಯು ದೇವಾ
ಲಯವನ್ನು ತುಂಬಿಕೊಂಡಿತ್ತು.

6 ಆಗ ಸೊಲೊಮೋನನು, ‘‘ಯೆಹೋವನೇ,
ಕಾರ್ಗತ್ತಲಿನಲ್ಲಿ ವಾಸಿಸುತ್ತೇನೆ ಎಂದು ಹೇಳಿರು
ವೆಯಲ್ಲಾ! 2ನಾನು ನಿನಗೋಸ್ಕರ ಆಲಯವನ್ನು ಕಟ್ಟಿ
ದ್ದೇನೆ. ಅದು ನಿನಗೆ ಶಾಶ್ವತವಾದ ವಾಸಸ್ಥಳವಾಗಲಿ’’
ಎಂದು ಪ್ರಾರ್ಥಿಸಿದನು.

### ಸೊಲೊಮೋನನ ಭಾಷಣ

3ಸೊಲೊಮೋನನು ತನ್ನ ಮುಂದೆ ನೆರೆದಿದ್ದ ಎಲ್ಲಾ
ಇಸ್ರೇಲ್ ಸಮೂಹದವರ ಕಡೆಗೆ ತಿರುಗಿ ಅವರನ್ನು
ಆಶೀರ್ವದಿಸಿ, 4‘‘ಇಸ್ರೇಲಿನ ದೇವರಾದ ಯೆಹೋವನಿಗೆ
ಸ್ತೋತ್ರವಾಗಲಿ. ಆತನು ನನ್ನ ತಂದೆಯಾದ ದಾವೀದನಿಗೆ
ಮಾಡಿದ ವಾಗ್ದಾನವನ್ನು ನೆರವೇರಿಸಿದ್ದಾನೆ. ಆತನು
ದಾವೀದನಿಗೆ, 5ಈಜಿಪ್ಟಿನಿಂದ ನನ್ನ ಜನರನ್ನು ಬಿಡಿಸಿ
ಹೊರ ತಂದಂದಿನಿಂದ ನನ್ನ ಆಲಯಕೋಸ್ಕರ ಇಸ್ರೇಲರ
ಕುಲಗಳ ಯಾವ ಪಟ್ಟಣವನ್ನೂ ನಾನು ಆರಿಸಿಕೊಳ್ಳಲಿಲ್ಲ.
ಇಸ್ರೇಲರನ್ನು ನಡಿಸುವುದಕ್ಕಾಗಿ ಒಬ್ಬ ನಾಯಕನನ್ನೂ
ನಾನು ಆರಿಸಿಕೊಳ್ಳಲಿಲ್ಲ. 6ಆದರೆ ಈಗ ನಾನು ನನ್ನ

ಹೆಸರನ್ನು ಸ್ಥಾಪಿಸಲು ಜೆರುಸಲೇಮನ್ನು ಆರಿಸಿಕೊಂಡಿ
ದ್ದೇನೆ; ದಾವೀದನನ್ನು ನನ್ನ ಜನರ ನಾಯಕನನ್ನಾಗಿ
ಆರಿಸಿಕೊಂಡಿದ್ದೇನೆ.
7‘‘ಇಸ್ರೇಲರ ದೇವರಾದ ಯೆಹೋವನಿಗೆ ಆಲಯ
ವನ್ನು ಕಟ್ಟಲು ನನ್ನ ತಂದೆಯಾದ ದಾವೀದನಿಗೆ
ಮನಸ್ಸಿತ್ತು. 8ಆದರೆ ದೇವರು ನನ್ನ ತಂದೆಗೆ,
’ದಾವೀದನೇ, ನೀನು ನನಗಾಗಿ ಒಂದು ಆಲಯವನ್ನು
ಕಟ್ಟಲು ಮನಸ್ಸು ಮಾಡಿರುವದು ಒಳ್ಳೆಯದೇ ಸರಿ!
9ಆದರೆ ನೀನು ಆಲಯವನ್ನು ಕಟ್ಟಬಾರದು., ನಿನ್ನ ಸ್ವಂತ
ಮಗನು ನನ್ನ ಹೆಸರಿಗಾಗಿ ಆಲಯವನ್ನು ಕಟ್ಟುವನು’
ಎಂದು ಹೇಳಿದನು. 10ಯೆಹೋವನು ತಾನು ಕೊಟ್ಟ
ಮಾತನ್ನು ಈಗ ನೆರವೇರಿಸಿದನು. ನಾನು ನನ್ನ ತಂದೆಯ
ಸ್ಥಾನದಲ್ಲಿ ಅರಸನಾಗಿದ್ದೇನೆ. ದಾವೀದನು ನನ್ನ ತಂದೆ.
ಈಗ ನಾನು ಇಸ್ರೇಲರ ರಾಜನು. ಇದು ದೇವರ ವಾಗ್ದಾನ
ಕ್ಕನುಸಾರವಾಗಿದೆ. ನಾನು ಇಸ್ರೇಲರ ದೇವರಾದ
ಯೆಹೋವನ ನಾಮಕ್ಕಾಗಿ ದೇವಾಲಯವನ್ನು ಕಟ್ಟಿರು
ತ್ತೇನೆ. 11ಇದಲ್ಲದೆ ನಿಬಂಧ ಶಾಸನವಿರುವ ದೇವರ
ಒಡಂಬಡಿಕೆಯ ಪೆಟ್ಟಿಗೆಯನ್ನು ದೇವಾಲಯದೊಳಗೆ
ಇಟ್ಟಿರುತ್ತೇನೆ’’ ಎಂದು ಹೇಳಿದನು.

### ಸೊಲೊಮೋನನ ಪ್ರಾರ್ಥನೆ

12ಯಜ್ಞವೇದಿಕೆಯ ಮುಂದೆ ಸೊಲೊಮೋನನು
ಇಸ್ರೇಲರ ಜನರೆದುರಿಗೆ ನಿಂತುಕೊಂಡು ತನ್ನ ಕೈ
ಗಳನ್ನೆತ್ತಿಕೊಂಡು ನಿಂತನು. 13ಸೊಲೊಮೋನನು ಒಂದು
ತಾಮ್ರದ ಪೀಠವನ್ನು ತಯಾರಿಸಿದ್ದನು. ಆದರ ಉದ್ದ
ಐದು ಮೊಳ; ಅಗಲ ಐದು ಮೊಳ; ಎತ್ತರ ಮೂರು ಮೊಳ;
ಅದನ್ನು ಪ್ರಾಕಾರದ ಮಧ್ಯದಲ್ಲಿಟ್ಟು ಆದರ ಮೇಲೆ
ಇಸ್ರೇಲ್ ಸರ್ವಜನರ ಮುಂದೆ ಮೊಣಕಾಲೂರಿ ತನ್ನ
ಕೈಗಳನ್ನು ಆಕಾಶದ ಕಡೆ ಎತ್ತಿ,
14‘‘ಇಸ್ರೇಲರ ದೇವರಾದ ಯೆಹೋವನೇ, ಭೂಪರ
ಲೋಕಗಳಲ್ಲಿ ನಿನಗೆ ಸಮಾನರಾದ ಬೇರೆ ದೇವರು
ಗಳಿಲ್ಲ. ನೀನು ನಿನ್ನ ಪ್ರೀತಿ ಕರುಣೆಯಿಂದೊಡ ಗೂಡಿದ
ವಾಗ್ದಾನಗಳನ್ನು ನೆರವೇರಿಸುವೆ. ನೀನು ಮತ್ತು ನಿನ್ನ
ಸೇವಕರು ಹೃದಯಪೂರ್ವಕವಾಗಿ ನಿನಗೆ ಯೋಗ್ಯರಾಗಿ
ನಡೆದು, ನಿನ್ನ ಆಜ್ಞೆಗಳಿಗೆ ವಿಧೇಯರಾಗುವದಾದರೆ
ಅವರ ವಿಷಯದಲ್ಲಿ ನಿನ್ನ ವಾಗ್ದಾನವನ್ನು ನೆರವೇರಿಸುವೆ.
15ನಿನ್ನ ಸೇವಕನಾದ ದಾವೀದನಿಗೆ ನೀನು ಮಾಡಿದ
ವಾಗ್ದಾನವನ್ನು ನೆರವೇರಿಸಿರುವೆ. ದಾವೀದನು ನನ್ನ ತಂದೆ.
ಅವನಿಗೆ ನೀನು ವಾಗ್ದಾನವನ್ನು ಮಾಡಿರುವೆ. ಈ ದಿನ ನಿನ್ನ
ವಾಗ್ದಾನವು ನಿನ್ನ ಹಸ್ತದ ಮೂಲಕ ನೆರವೇರಿತ್ತು.
16ಇಸ್ರೇಲರ ದೇವರಾದ ಯೆಹೋವನೇ, ‘‘ನೀನು ನನ್ನ
ತಂದೆಯಾದ ದಾವೀದನಿಗೆ, ‘ನಿನ್ನ ಸಂತಾನದವರು
ನಿನ್ನಂತೆ ನನ್ನ ಆಜ್ಞೆಗಳಿಗೆ ವಿಧೇಯರಾಗಿದ್ದರೆ, ನಿನ್ನ
ಸಂತಾನದವರೇ ಇಸ್ರೇಲ್ ಸಿಂಹಾಸನದ ಮೇಲೆ ಕುಳಿತು
ಕೊಳ್ಳುವರು.’ ಎಂದು ವಾಗ್ದಾನ ಮಾಡಿದೆಯಲ್ಲಾ?
17ಇಸ್ರೇಲರ ದೇವರಾದ ಯೆಹೋವನೇ, ನೀನು ನಿನ್ನ
ಸೇವಕನಾದ ದಾವೀದನಿಗೆ ಕೊಟ್ಟಿರುವ ನಿನ್ನ ವಾಗ್ದಾನವು
ನೆರವೇರಲಿ.
18‘‘ದೇವರೇ, ನೀನು ಭೂಮಿಯ ಮೇಲೆ ಜನ
ರೊಂದಿಗೆ ವಾಸಿಸುವವನಲ್ಲವೆಂದು ತಿಳಿದಿದ್ದೇವೆ. ಆಕಾಶ
ಮಂಡಲವಾಗಲೀ ಅತ್ಯುನ್ನತವಾದ ಆಕಾಶವಾಗಲೀ
ನಿನಗೆ ವಾಸಸ್ಥಾನವಾಗಲು ಸಾಧ್ಯವಿಲ್ಲ. ಈಗ ನಾನು
ಕಟ್ಟಿರುವ ಈ ಆಲಯವು ಸಹ ನಿನ್ನ ವಾಸಕ್ಕೆ ಸಾಲದು.
19ನನ್ನ ಪ್ರಾರ್ಥನೆಗೆ ಲಕ್ಷ್ಯಕೊಡು ಎಂದು ನಿನ್ನನ್ನು
ಬೇಡುತ್ತೇನೆ. ದೇವರಾದ ಯೆಹೋವನೇ, ನನ್ನ ಬೇಡಿಕೆ
ಗಳನ್ನು ಮತ್ತು ಸ್ತೋತ್ರಗಳನ್ನು ಲಾಲಿಸು. ನಾನು ನಿನ್ನ
ಸೇವಕನಾಗಿದ್ದೇನೆ. 20ನಿನ್ನ ಕಣ್ಣುಗಳು ಹಗಲಿರುಳು ಈ
ಆಲಯವನ್ನು ದೃಷ್ಟಿಸುತ್ತಲೇ ಇರಲಿ. ನೀನು ನಿನ್ನ ನಾಮ
ವನ್ನು ಇಲ್ಲಿ ಸ್ಥಾಪಿಸುತ್ತೇನೆ ಎಂದು ಹೇಳಿರುವೆ. ನಾನು
ಈ ದೇವಾಲಯದ ಕಡೆಗೆ ತಿರುಗಿಕೊಂಡು ಪ್ರಾರ್ಥಿಸು
ವಾಗ ಆಲೈಸು. 21ನಿನ್ನ ಜನರಾದ ಇಸ್ರೇಲರು ಮತ್ತು
ನಾನು ಮಾಡುವ ಪ್ರಾರ್ಥನೆಯನ್ನು ಆಲೈಸು. ನಾವು ಈ
ದೇವಾಲಯದ ಕಡೆಗೆ ತಿರುಗಿಕೊಂಡು ನಿನಗೆ ಪ್ರಾರ್ಥಿಸು
ವಾಗ ನಿನ್ನ ನಿವಾಸವಾದ ಪರಲೋಕದಿಂದ ನಮ್ಮ
ಪ್ರಾರ್ಥನೆಯನ್ನು ಆಲೈಸು; ನಮ್ಮ ಪಾಪಗಳನ್ನು ಕ್ಷಮಿಸು.
22‘‘ಒಬ್ಬನು ಇನ್ನೊಬ್ಬನಿಗೆ ವಿರುದ್ಧವಾಗಿ ದುಷ್ಟ
ಕಾರ್ಯ ನಡೆಸಿದ್ದರೂ ತಾನು ಮಾಡಿಲ್ಲವೆಂದು ಹಾಗೆ ನಿನ್ನ
ಯಜ್ಞವೇದಿಕೆಯ ಮುಂದೆ ಬಂದು ನಿನ್ನ ಹೆಸರಿನಲ್ಲಿ
ಪ್ರಮಾಣಮಾಡಿದರೆ23ಅದನ್ನುನೀನು ಪರಲೋಕದಿಂದ
ಆಲೈಸಿ ನಿನ್ನ ಸೇವಕನ ನ್ಯಾಯತೀರಿಸು. ಕೇಡು ಮಾಡಿ
ದವನನ್ನು ಶಿಕ್ಷಿಸು; ಅವನು ಇನ್ನೊಬ್ಬನಿಗೆ ಮಾಡಿದ ದುಷ್ಟ
ಕಾರ್ಯವು ಅವನಿಗೇ ತಟ್ಟುವಂತೆ ಮಾಡು. ಯಾವನು
ನಿರಪರಾಧಿಯೆಂಬುದನ್ನು ತೋರಿಸಿಕೊಟ್ಟು ಅವನ
ನೀತಿಗೆ ತಕ್ಕಂತೆ ಪ್ರತಿಫಲ ಕೊಡು.
24‘‘ನಿನ್ನ ಜನರಾದ ಇಸ್ರೇಲರು ನಿನಗೆ ವಿರುದ್ಧವಾಗಿ
ಪಾಪಮಾಡಿದಾಗ ವೈರಿಗಳು ಬಂದು ಅವರನ್ನು ಯುದ್ಧ
ದಲ್ಲಿ ಸೋಲಿಸಿದರೂ ನಿನ್ನ ಜನರು ನಿನ್ನ ಕಡೆಗೆ ತಿರುಗಿ
ತಮ್ಮ ಪಾಪಗಳನ್ನು ಒಪ್ಪಿಕೊಂಡು ಈ ದೇವಾಲಯಕ್ಕೆ
ಬಂದು ನಿನ್ನ ಹೆಸರನ್ನು ಹೇಳಿಕೊಂಡು ನಿನಗೆ ಪ್ರಾರ್ಥಿಸಿ
ಬೇಡಿಕೊಂಡರೆ 25ಆಗ ನೀನು ಪರಲೋಕದಿಂದ ಅವರ
ಮೊರೆಯನ್ನು ಲಾಲಿಸಿ, ನಿನ್ನ ಜನರ ಪಾಪಗಳನ್ನು
ಮನ್ನಿಸು. ಅವರ ಪೂರ್ವಿಕರಿಗೆ ನೀನು ಕೊಟ್ಟ ದೇಶಕ್ಕೆ
ಅವರನ್ನು ಮತ್ತೆ ಬರಮಾಡು.
26‘‘ನಿನ್ನ ಜನರಾದ ಇಸ್ರೇಲರು ನಿನಗೆ ವಿರುದ್ಧವಾಗಿ
ಪಾಪಮಾಡಿದಾಗ ನೀನು ಆಕಾಶದಿಂದ ಮಳೆ ಬೀಳದಂತೆ
ತಡೆದಾಗ ನಿನ್ನ ಜನರು ಪಶ್ಚಾತ್ತಾಪಪಟ್ಟು ಈ

ದೇವಾಲಯದ ಕಡೆಗೆ ತಿರುಗಿ ನಿನ್ನನ್ನು ಪ್ರಾರ್ಥಿಸಿ ತಮ್ಮ
ಪಾಪಗಳನ್ನು ಬಿಟ್ಟುಬಿಟ್ಟರೆ 27ನೀನು ಪರಲೋಕದಿಂದ
ಅವರನ್ನು ಆಲೈಸು. ಇಸ್ರೇಲರು ನಿನ್ನ ಸೇವಕರಾಗಿದ್ದಾರೆ.
ಅವರು ಬದುಕುವಂತೆ ಸರಿಯಾದ ಮಾರ್ಗವನ್ನು ಅವರಿಗೆ
ತೋರ್ಪಡಿಸು. ಅವರ ದೇಶದ ಮೇಲೆ ಮಳೆಯನ್ನು
ಸುರಿಸು. ನಿನ್ನ ಜನರಿಗೆ ನೀನು ಆ ದೇಶವನ್ನೇ ಸ್ವಾಸ್ಥ್ಯವಾಗಿ
ಕೊಟ್ಟಿರುವೆ.

28"ಆ ದೇಶದಲ್ಲಿ ಬರಗಾಲ ಬಂದಾಗ ಅಥವಾ
ಸೋಂಕುರೋಗ ತಗಲಿದಾಗ, ಅಥವಾ ಮಿಡತೆಗಳಿಂದ
ಬಾಧಿಸಲ್ಪಟ್ಟಾಗ, ವೈರಿಗಳು ಬಂದು ನಿನ್ನ ಜನರ ಮೇಲೆ
ಅವರ ನಗರಗಳಲ್ಲಿಯೇ ಯುದ್ಧಮಾಡಿದಾಗ, ಅಥವಾ
ಭಯಂಕರವಾದ ಕಾಯಿಲೆಯು ದೇಶದ ಜನರನ್ನು
ಕಾಡಿದಾಗ 29ತಮ್ಮ ಸಂಕಟಗಳ ಕುರಿತು ಈ ಆಲಯದ
ಕಡೆಗೆ ಕೈಯೆತ್ತಿ ನಿನಗೆ ಮೊರೆಯಿಡುವದಾದರೆ, 30ನೀನು
ಪರಲೋಕದಿಂದ ಅವರ ಮೊರೆಯನ್ನು ಆಲೈಸಿ ಅವರ
ಪ್ರಾರ್ಥನೆಗೆ ಉತ್ತರವನ್ನು ದಯಪಾಲಿಸು; ಪ್ರತಿ
ಯೊಬ್ಬನಿಗೂ ತಕ್ಕ ಪ್ರತಿಫಲವನ್ನು ಕೊಡು. ಯಾಕಂದರೆ
ಪ್ರತಿಯೊಬ್ಬನ ಹೃದಯವನ್ನು ನೀನೊಬ್ಬನೇ ತಿಳಿದಿರುವೆ.
31ಆಗ, ನಮ್ಮ ಪೂರ್ವಿಕರಿಗೆ ನೀನು ಅನುಗ್ರಹಿಸಿದ
ದೇಶದಲ್ಲಿರುವ ನಿನ್ನ ಜನರು ನಿನಗೆ ಭಯಭಕ್ತಿಯಿಂದ
ಸೇವೆಮಾಡುವರು.

32"ಇಸ್ರೇಲಿನವನಲ್ಲದ ಪರದೇಶಿಯು ನಿನ್ನ ಪರಾ
ಕ್ರಮವನ್ನೂ ನಿನ್ನ ಸಾಮರ್ಥ್ಯವನ್ನೂ ಕಂಡು ಕೇಳಿ ಇಲ್ಲಿಗೆ
ಬಂದು ಈ ಆಲಯದ ಮುಂದೆ ನಿಂತುಕೊಂಡು ನಿನಗೆ
ಪ್ರಾರ್ಥಿಸುವದಾದರೆ, 33ಪರಲೋಕದಲ್ಲಿ ವಾಸಿಸುವ
ನೀನು ಆ ಪರದೇಶಿಯ ಪ್ರಾರ್ಥನೆಯನ್ನು ಕೇಳಿ
ಉತ್ತರಿಸು. ಆಗ ಇಸ್ರೇಲ್ ಜನರಂತೆ ಈ ಲೋಕ
ದಲ್ಲಿರುವ ಜನರೆಲ್ಲಾ ನಿನ್ನ ವಿಷಯ ಕೇಳಿ ನಿನ್ನನ್ನು
ಗೌರವಿಸುವರು. ನಾನು ಕಟ್ಟಿದ ಈ ದೇವಾಲಯವು ನಿನ್ನ
ಹೆಸರಿನಿಂದ ಕರೆಯಲ್ಪಟ್ಟಿದೆ ಎಂಬದು ಆಗ ಅವರಿಗೆ
ಗೊತ್ತಾಗುವುದು.

34"ನೀನು ನಿನ್ನ ಜನರನ್ನು ಅವರ ವೈರಿಗಳ ವಿರುದ್ಧವಾಗಿ
ಯುದ್ಧಮಾಡಲು ಒಂದು ಸ್ಥಳಕ್ಕೆ ಕಳುಹಿಸುವಾಗ ನೀನು
ಆರಿಸಿಕೊಂಡ ಈ ಪಟ್ಟಣದ ಕಡೆಗೂ ನಿನ್ನ ಹೆಸರಿಗಾಗಿ
ನಾನು ಕಟ್ಟಿದ ಈ ದೇವಾಲಯದ ಕಡೆಗೂ ಅವರು
ತಿರುಗಿಕೊಂಡು ನಿನಗೆ ಪ್ರಾರ್ಥಿಸಿದರೆ 35ಪರಲೋಕ
ದಿಂದ ನೀನು ಅವರ ಪ್ರಾರ್ಥನೆಯನ್ನು ಕೇಳಿ ಅವರಿಗೆ
ಸಹಾಯ ಮಾಡು.

36"ಜನರು ನಿನಗೆ ವಿರುದ್ಧವಾಗಿ ಪಾಪಮಾಡಬಹುದು;
ಪಾಪಮಾಡದೆ ಇರುವವನು ಯಾವನೂ ಇಲ್ಲ. ಆಗ
ನೀನು ಅವರ ಮೇಲೆ ಉರಿಗೊಂಡು ಅವರನ್ನು ಶಿಕ್ಷಿಸಲು
ನೀನು ವೈರಿಗಳನ್ನು ಅವರ ಮೇಲೆ ಕಳುಹಿಸಿ ಅವರನ್ನು
ಸೆರೆಹಿಡಿದು ದೂರದೇಶಕ್ಕೆ ಒಯ್ಯಲ್ಪಡುವಂತೆ ಮಾಡಿ
ದಾಗ 37ಒಂದು ವೇಳೆ ಅವರು ಪಶ್ಚಾತ್ತಾಪಪಟ್ಟು ನಿನ್ನ
ಕಡೆಗೆ ತಿರುಗಿಕೊಂಡು ತಾವು ಸೆರೆಯಲ್ಲಿರುವ ದೇಶದಿಂದ
ನಿನಗೆ ಮೊರೆಯಿಟ್ಟು, 'ನಿನಗೆ ವಿರುದ್ಧವಾಗಿ ನಾವು
ಪಾಪಮಾಡಿದ್ದೇವೆ ನಾವು ದುಷ್ಟತ್ವದಲ್ಲಿ ಜೀವಿಸಿದ್ದೇವೆ'
ಎಂದು ಅರಿಕೆ ಮಾಡಿ 38ತಮ್ಮ ಹೃದಯಪೂರ್ವಕವಾಗಿ
ತಮ್ಮ ದೇಶದ ಕಡೆಗೆ ಅಂದರೆ ನೀನು ಅವರ ಪೂರ್ವಿಕರಿಗೆ
ಕೊಟ್ಟ ಈ ದೇಶದ ಕಡೆಗೂ ನೀನು ಆರಿಸಿಕೊಂಡ
ಪಟ್ಟಣದ ಕಡೆಗೂ ನಿನ್ನ ಹೆಸರಿಗಾಗಿ ನಾನು ಕಟ್ಟಿಸಿದ ಈ
ದೇವಾಲಯದ ಕಡೆಗೂ ಮುಖಮಾಡಿಕೊಂಡು ಪ್ರಾರ್ಥಿ
ಸುವಾಗ, 39ನಿನ್ನ ವಾಸಸ್ಥಾನವಾಗಿರುವ ಪರಲೋಕದಿಂದ
ನೀನು ಅವರ ಪ್ರಾರ್ಥನೆಯನ್ನು ಕೇಳಿ ಅವರಿಗೆ
ಸಹಾಯಿಸು. ನಿನಗೆ ವಿರುದ್ಧವಾಗಿ ಪಾಪಮಾಡಿದವರನ್ನು
ಕ್ಷಮಿಸು. 40ನನ್ನ ದೇವರೇ, ಈ ಸ್ಥಳದಲ್ಲಿ ಪ್ರಾರ್ಥಿಸುವ
ನಮ್ಮನ್ನು ವೀಕ್ಷಿಸಿ ನಮ್ಮ ಪ್ರಾರ್ಥನೆಗೆ ಕಿವಿಗೊಡು.

41 ದೇವರಾದ ಯೆಹೋವನೇ, ಎದ್ದು ನಿನ್ನ
ಸಾಮರ್ಥ್ಯವನ್ನು ತೋರಿಸುವ ಒಡಂಬಡಿಕೆಯ
ಪೆಟ್ಟಿಗೆ ಯೊಡನೆ ನಿನ್ನ ವಾಸಸ್ಥಳಕ್ಕೆ ಬಾ. ನಿನ್ನ
ಯಾಜಕರು ರಕ್ಷಣಾವಸ್ತ್ರವನ್ನು ಧರಿಸಿಕೊಂಡಿರಲಿ;
ನಿನ್ನನ್ನು ಪ್ರೀತಿಸುವವರು ನಿನ್ನ ಒಳ್ಳೇತನದಲ್ಲಿ
ಸಂತೋಷಪಡಲಿ.
42 ದೇವರಾದ ಯೆಹೋವನೇ, ನಿನ್ನಿಂದ ಅಭಿಷೇಕಿಸ
ಲ್ಪಟ್ಟಿರುವ ಅರಸನನ್ನು ತಳ್ಳಿಬಿಡಬೇಡ. ನಿನಗೆ
ನಂಬಿಗಸ್ತನಾದ ಸೇವಕನಾಗಿದ್ದ ದಾವೀದನನ್ನು
ನೆನಪುಮಾಡಿಕೊ."

## ದೇವಾಲಯದ ಪ್ರತಿಷ್ಠೆ

7 ಸೊಲೊಮೋನನು ಪ್ರಾರ್ಥಿಸುವದನ್ನು ನಿಲ್ಲಿಸಿದ
ಕೂಡಲೇ ಆಕಾಶದಿಂದ ಬೆಂಕಿಯು ಬಂದು ಯಜ್ಞ
ವೇದಿಕೆಯ ಮೇಲಿದ್ದ ಯಜ್ಞವಸ್ತುಗಳನ್ನು ದಹಿಸಿತು;
ಯೆಹೋವನ ಮಹಿಮೆಯು ದೇವಾಲಯದಲ್ಲಿ
ತುಂಬಿತು. 2ದೇವಾಲಯದಲ್ಲಿ ತುಂಬಲ್ಪಟ್ಟ ಮಹಿಮೆ
ಯಿಂದಾಗಿ ಯಾಜಕರಿಗೆ ದೇವಾಲಯದೊಳಗೆ ಪ್ರವೇಶಿ
ಸಲು ಆಗದೆ ಹೋಯಿತು. 3ಸೇರಿಬಂದ ಇಸ್ರೇಲ್
ಜನರೆಲ್ಲಾ ಆಕಾಶದಿಂದ ಬೆಂಕಿ ಬೀಳುವದನ್ನೂ ದೇವಾ
ಲಯದಲ್ಲಿ ದೇವರ ಮಹಿಮೆ ತುಂಬಿದ್ದನ್ನೂ ನೋಡಿ
ನೆಲದ ಮೇಲೆ ಬೋರಲಬಿದ್ದು

'ದೇವರು ಒಳ್ಳೆಯವನು, ಅವನ ಕರುಣೆಯು ನಿರಂತ
ರಕ್ಕು ಇರುವಂಥದ್ದು' ಎಂದು ಹೇಳುತ್ತಾ ದೇವರನ್ನು
ಸುತ್ತಿಸಿ ಕೊಂಡಾಡಿದರು.

4ಅನಂತರ ಅರಸನಾದ ಸೊಲೊಮೋನನೂ ಇಸ್ರೇಲಿನ
ಎಲ್ಲಾ ಜನರೂ ದೇವರ ಮುಂದೆ ಯಜ್ಞವನ್ನು ಸಮರ್ಪಿ
ಸಿದರು. 5ಸೊಲೊಮೋನ ಅರಸನು ಇಪ್ಪತ್ತೆರಡು ಸಾವಿರ

ಹೋರಿಗಳನ್ನೂ ಒಂದು ಲಕ್ಷ ಇಪ್ಪತ್ತು ಸಾವಿರ ಕುರಿ
ಗಳನ್ನೂ ಯಜ್ಞವಾಗಿ ಸಮರ್ಪಿಸಿದನು. ಅರಸನೂ ಎಲ್ಲಾ
ಜನರೂ ದೇವಾಲಯವನ್ನು ಆರಾಧನೆಗಾಗಿ ಪ್ರತಿಷ್ಠಿ
ಸಿದರು. [6]ಯಾಜಕರು ತಮ್ಮ ಕೆಲಸಗಳನ್ನು ಮಾಡಲು
ತಮ್ಮ ಸ್ಥಳಗಳಲ್ಲಿ ತಯಾರಾಗಿ ನಿಂತಿದ್ದರು. ಲೇವಿ ಕುಲದ
ಗಾಯಕರು ತಮ್ಮ ವಾದ್ಯಗಳೊಂದಿಗೆ ದೇವರಿಗೆ ಸ್ತುತಿಸಲು
ನಿಂತಿದ್ದರು. ಆ ವಾದ್ಯಗಳನ್ನು ಅರಸನಾದ ದಾವೀದನು
ದೇವರನ್ನು ಸ್ತುತಿಸುವದಕ್ಕೋಸ್ಕರ ತಯಾರಿಸಿದ್ದನು.
ಯಾಜಕರೂ ಲೇವಿಯರೂ, 'ದೇವರಾದ ಯೆಹೋವನ
ಕೃಪೆಯು ನಿರಂತರವಾದದ್ದು' ಎಂದು ಹೇಳುತ್ತಿದ್ದರು.
ಯಾಜಕರು ಲೇವಿಯರಿಗೆ ಎದುರಾಗಿ ನಿಂತುಕೊಂಡು
ತುತ್ತೂರಿಯನ್ನು ಊದಿದರು. ಇಸ್ರೇಲರೆಲ್ಲರೂ ನಿಂತು
ಕೊಂಡರು.

[7]ಆಲಯದ ಮುಂದೆ ಇದ್ದ ಅಂಗಳವನ್ನು ಸೊಲೊ
ಮೋನನು ಶುದ್ಧೀಕರಿಸಿದನು. ಆ ಸ್ಥಳದಲ್ಲಿ ಸೊಲೊ
ಮೋನನು ಸರ್ವಾಂಗಹೋಮವನ್ನೂ, ಸಮಾಧಾನ
ಯಜ್ಞದ ಕೊಬ್ಬನ್ನೂ ಸಮರ್ಪಿಸಿದ್ದನು. ಯಾಕಂದರೆ
ಸೊಲೊಮೋನನು ಮಾಡಿಸಿದ ತಾಮ್ರದ ಯಜ್ಞ
ವೇದಿಕೆಯ ಮೇಲೆ ಇಷ್ಟೆಲ್ಲಾ ಸರ್ವಾಂಗ ಹೋಮಗಳನ್ನು
ದಾನ್ಯನೈವೇದ್ಯಗಳನ್ನು ಸಮರ್ಪಿಸಲು ಆಗದೆ
ಹೋಯಿತು.

[8]ಸೊಲೊಮೋನನೂ ಎಲ್ಲಾ ಇಸ್ರೇಲರೂ ಏಳು
ದಿನಗಳ ತನಕ ಪರ್ಣಶಾಲೆಗಳ ಹಬ್ಬವನ್ನು ಆಚರಿಸಿದರು.
ಸೊಲೊಮೋನನೊಂದಿಗೆ ಬಹು ದೊಡ್ಡ ಇಸ್ರೇಲರ
ಸಮೂಹವು ನೆರೆದುಬಂದಿತ್ತು. ಹಮಾತಿನಿಂದ ಹಿಡಿದು
ಈಜಿಪ್ಟಿನ ನದಿಯ ತನಕ ವಾಸಿಸುವವರೆಲ್ಲರೂ ಜೆರುಸ
ಲೇಮಿಗೆ ಬಂದಿದ್ದರು. [9]ಏಳು ದಿನ ಹಬ್ಬದ ಆಚರಣೆಯ
ಬಳಿಕ ಎಂಟನೆಯ ದಿನವನ್ನು ಪವಿತ್ರ ದಿನವನ್ನಾಗಿ ಆಚರಿ
ಸಿದರು. ಅವರು ಯಜ್ಞವೇದಿಕೆಯನ್ನು ಯೆಹೋವನ
ಆರಾಧನೆಗೋಸ್ಕರ ಪ್ರತಿಷ್ಠಿಸಿದರು. ಹಬ್ಬವನ್ನು ಏಳು
ದಿನಗಳ ತನಕ ಆಚರಿಸಿದರು. [10] ಏಳನೆಯ ತಿಂಗಳಿನ
ಇಪ್ಪತ್ತಮೂರನೆಯ ದಿನದಂದು ಸೊಲೊಮೋನನು
ನೆರೆದುಬಂದಿದ್ದ ಜನರನ್ನು ಅವರ ಮನೆಗಳಿಗೆ ಕಳುಹಿ
ಸಿದನು. ದೇವರಾದ ಯೆಹೋವನು ದಾವೀದನಿಗೂ
ಅವನ ಮಗನಾದ ಸೊಲೊಮೋನನಿಗೂ ಮತ್ತು ಎಲ್ಲಾ
ಇಸ್ರೇಲರಿಗೂ ಕರುಣೆಯನ್ನು ತೋರಿಸಿದ್ದಕ್ಕಾಗಿ ಜನರೆ
ಲ್ಲರೂ ಹರ್ಷಿಸುತ್ತಾ ತಮ್ಮ ಮನೆಗಳಿಗೆ ಹಿಂತಿರುಗಿದರು.

### ಸೊಲೊಮೋನನಿಗೆ ದೇವರು ಪ್ರತ್ಯಕ್ಷನಾದದ್ದು

[11]ಸೊಲೊಮೋನನು ತಾನು ಯೋಜಿಸಿದ ರೀತಿಯಲ್ಲಿ
ದೇವಾಲಯವನ್ನೂ ಅರಮನೆಯನ್ನೂ ಕಟ್ಟಿ ಮುಗಿಸಿ
ದನು. [12]ಆ ಬಳಿಕ ಯೆಹೋವನು ರಾತ್ರಿಯಲ್ಲಿ
ಸೊಲೊಮೋನನಿಗೆ ಕಾಣಿಸಿಕೊಂಡು, ''ಸೊಲೊ-
ಮೋನನೇ, ನಾನು ನಿನ್ನ ಪ್ರಾರ್ಥನೆಯನ್ನು ಕೇಳಿದ್ದೇನೆ.
ನಾನು ಈ ಆಲಯವನ್ನು ಯಜ್ಞಾಲಯಕ್ಕಾಗಿ ಆರಿಸಿ
ಕೊಂಡಿರುತ್ತೇನೆ. [13]ನಾನು ಮಳೆ ಬಾರದಂತೆ ಆಕಾಶವನ್ನು
ಮುಚ್ಚಿದರೆ, ಅಥವಾ ಮಿಡತೆಗಳಿಗೆ ದೇಶವನ್ನು ಹಾಳು
ಮಾಡಲು ಅಪ್ಪಣೆಕೊಟ್ಟರೆ ಅಥವಾ ಜನರಿಗೆ ರೋಗ
ವನ್ನು ಬರಮಾಡಿದರೆ [14]ನನ್ನ ಹೆಸರಿನಿಂದ ಕರೆಯಲ್ಪಡುವ
ನನ್ನ ಜನರು ದೀನತೆಯಿಂದ ಪ್ರಾರ್ಥಿಸಿ, ತಮ್ಮ ಪಾಪ
ಗಳನ್ನು ಬಿಟ್ಟು ನನ್ನ ಕಡೆಗೆ ತಿರುಗಿದರೆ ನಾನು ಪರ
ಲೋಕದಿಂದ ಅವರನ್ನು ಆಲೈಸಿ, ಅವರ ಪಾಪಗಳನ್ನು
ಮನ್ನಿಸಿ ಅವರ ದೇಶವನ್ನು ಗುಣಪಡಿಸುವೆನು. [15]ನಿಮ್ಮನ್ನು
ದೃಷ್ಟಿಸಿ ನಿಮ್ಮ ಪ್ರಾರ್ಥನೆಗಳಿಗೆ ಕಿವಿಗೊಡುವೆನು. [16]ನನ್ನ
ನಾಮದ ಮಹತ್ವ ಶಾಶ್ವತವಾಗಿರಬೇಕೆಂದು ನಾನು ಈ
ಆಲಯವನ್ನು ಆರಿಸಿಕೊಂಡು ಶುದ್ಧೀಕರಿಸಿದ್ದೇನೆ.
ಹೌದು, ನನ್ನ ದೃಷ್ಟಿಯೂ ನನ್ನ ಹೃದಯವೂ ಸದಾಕಾಲ
ಈ ಆಲಯದ ಮೇಲೆ ನೆಲೆಸಿರುತ್ತದೆ.

[17]'ಸೊಲೊಮೋನನೇ, ನಿನ್ನ ತಂದೆಯಾದ
ದಾವೀದನು ಹೇಗೆ ಜೀವಿಸಿದನೋ ಅದೇ ಪ್ರಕಾರ ನೀನು
ನನ್ನೆದುರಿನಲ್ಲಿ ಜೀವಿಸಿ, ನನ್ನ ಅಪ್ಪಣೆಗಳನ್ನು ಕೈಕೊಂಡು,
ನನ್ನ ವಿಧಿನಿಯಮಗಳಿಗೆ ವಿಧೇಯನಾಗುವದಾದರೆ,
[18]ನಾನು ನಿನ್ನನ್ನು ಬಲಿಷ್ಠನಾದ ಅರಸನನ್ನಾಗಿ ಮಾಡು
ವೆನು. ನಿನ್ನ ರಾಜ್ಯವು ಮಹಾರಾಜ್ಯವಾಗುವದು. ನಿನ್ನ
ತಂದೆಯಾದ ದಾವೀದನಿಗೆ, 'ದಾವೀದನೇ, ನಿನ್ನ
ಕುಟುಂಬದವರಲ್ಲಿ ಒಬ್ಬನು ಯಾವಾಗಲೂ ಇಸ್ರೇಲಿನ
ರಾಜನಾಗಿರುವನು' ಎಂದು ನಾನು ವಾಗ್ದಾನ
ಮಾಡಿದ್ದೇನೆ.

[19]''ಆದರೆ ನಾನು ಕೊಟ್ಟ ಕಟ್ಟಳೆಗಳನ್ನು ಮತ್ತು ಆಜ್ಞೆ
ಗಳನ್ನು ನೀನು ಮೀರಿ ಇತರ ದೇವರುಗಳನ್ನು ಪೂಜಿಸಿ
ದರೆ, [20]ನಾನು ಇಸ್ರೇಲರನ್ನು ಅವರಿಗೆ ಕೊಟ್ಟಿರುವ
ದೇಶದಿಂದ ತೆಗೆದುಹಾಕುವೆನು; ನನ್ನ ಹೆಸರಿಗೋಸ್ಕರ
ಪವಿತ್ರ ಮಾಡಿದ ಈ ದೇವಾಲಯವನ್ನು ತೊರೆದು
ಬಿಡುವೆನು. ಈ ದೇವಾಲಯದ ಬಗ್ಗೆ ಲೋಕದ ಜನರು
ಗೇಲಿ ಮಾಡುವಂತೆ ಮಾಡುವೆನು. [21]ಅತ್ಯಂತ ಪ್ರಸಿದ್ಧಿ
ಹೊಂದಿದ ಈ ದೇವಾಲಯವನ್ನು ನೋಡುವ ಪ್ರತಿ
ಯೊಬ್ಬನು, 'ದೇವರು ಈ ದೇಶಕ್ಕೆ ಮತ್ತು ಈ ಆಲಯಕ್ಕೆ
ಹೀಗೇಕೆ ಮಾಡಿದನು' ಎಂದು ಆಚ್ಚರಿಪಡುವಂತೆ
ಮಾಡುವೆನು. [22]ಆಗ ಜನರು, 'ಯಾಕಂದರೆ ಇಸ್ರೇಲರು
ತಮ್ಮ ಪೂರ್ವಿಕರ ದೇವರಾದ ಯೆಹೋವನ ಆಜ್ಞೆಗಳಿಗೆ
ವಿಧೇಯರಾಗಲಿಲ್ಲ. ಆತನು ಅವರನ್ನು ಈಜಿಪ್ಟಿನಿಂದ
ಬಿಡಿಸಿ ಹೊರತಂದನು. ಆದರೆ ಅವರು ಬೇರೆ
ದೇವರುಗಳನ್ನು ಪೂಜಿಸಿ ಅವುಗಳ ಸೇವೆಮಾಡಿದರು.
ಆದುದರಿಂದಲೇ ಭಯಂಕರವಾದ ಈ ಸಂಕಟಗಳನ್ನೆಲ್ಲ
ದೇವರು ಇಸ್ರೇಲರಿಗೆ ಬರಮಾಡಿದನು' ಎಂದು
ಹೇಳುವರು.''

### ಸೊಲೊಮೋನನು ಕಟ್ಟಿದ ಪಟ್ಟಣಗಳು

8 ದೇವಾಲಯವನ್ನೂ ತನ್ನ ಅರಮನೆಯನ್ನೂ ಕಟ್ಟಲು
ಸೊಲೊಮೋನನಿಗೆ ಇಪ್ಪತ್ತು ವರುಷಗಳು ಬೇಕಾ
ದವು. 2ಅನಂತರ ಹೂರಾಮನು ಕೊಟ್ಟ ಪಟ್ಟಣಗಳನ್ನು
ಭದ್ರಪಡಿಸಿ ಕೆಲವು ಇಸ್ರೇಲರು ಅಲ್ಲಿ ವಾಸಿಸುವಂತೆ
ಮಾಡಿದನು. 3ಇದಾದ ಬಳಿಕ ಸೊಲೊಮೋನನು
ಚೋಬದ ಹಮಾತ್ ಎಂಬಲ್ಲಿಗೆ ಹೋಗಿ ಅದನ್ನು
ವಶಪಡಿಸಿಕೊಂಡನು. 4ಅರಣ್ಯದಲ್ಲಿದ್ದ ತದ್ಮೋರ್ ಎಂಬ
ಪಟ್ಟಣವನ್ನು ಸೊಲೊಮೋನನು ಕಟ್ಟಿದನು. ಆಮೇಲೆ
ಹಮಾತಿನ ಎಲ್ಲಾ ಪಟ್ಟಣಗಳನ್ನು ಉಗ್ರಾಣ ಪಟ್ಟಣ
ಗಳನ್ನಾಗಿ ಮಾಡಿದನು. 5ಎತ್ತರದ ಬೇತ್ಹೋರೋನ್
ಮತ್ತು ತಗ್ಗಿನ ಬೇತ್ಹೋರೋನ್ ಎಂಬ ನಗರಗಳನ್ನು
ಸೊಲೊಮೋನನು ಬಲವಾದ ಕೋಟೆಯ ನಗರಗಳ
ನ್ನಾಗಿ ಮತ್ತೆ ಕಟ್ಟಿದನು. ಆ ನಗರಗಳನ್ನು ಕೋಟೆ, ಕದ
ಮತ್ತು ಹೆಬ್ಬಾಗಿಲುಗಳಿಂದ ಬಲಗೊಳಿಸಿದನು. 6ಅಲ್ಲದೆ,
ಬಾಲಾತ್ ಪಟ್ಟಣ ಮತ್ತು ಇನ್ನಿತರ ಪಟ್ಟಣಗಳನ್ನು
ಉಗ್ರಾಣ ನಗರಗಳನ್ನಾಗಿ ಮಾಡಿದನು. ಅವನು ರಥ
ಗಳನ್ನು ಇಡುವದಕ್ಕಾಗಿಯೂ ಮತ್ತು ರಾಹುತರ ವಾಸ
ಕ್ಕಾಗಿಯೂ ಪಟ್ಟಣಗಳನ್ನು ಕಟ್ಟಿಸಿದನು. ಜೆರುಸಲೇಮಿ
ನಲ್ಲಿಯೂ ಲೆಬನೋನಿನಲ್ಲಿಯೂ ಮತ್ತು ತನ್ನ ಆಡಳಿತ
ದಲ್ಲಿದ್ದ ದೇಶಗಳಲ್ಲಿಯೂ ಸೊಲೊಮೋನನು ತನ್ನ
ಇಷ್ಟದ ಪ್ರಕಾರ ಕಟ್ಟಿಸಿದನು.

7-8ಇಸ್ರೇಲರು ಇದ್ದ ದೇಶದಲ್ಲಿ ಅನ್ಯ ಜನರಾದ ಹಿತ್ತಿ
ಯರು, ಅಮೋರಿಯರು, ಪೆರಿಜೀಯರು, ಹಿವ್ವಿಯರು
ಮತ್ತು ಯೆಬೂಸಿಯರು ವಾಸಿಸುತ್ತಿದ್ದರು. ಇವರನ್ನೆಲ್ಲಾ
ಸೊಲೊಮೋನನು ಗುಲಾಮರನ್ನಾಗಿ ಉಪಯೋಗಿಸಿ
ದನು. ಈ ಜನರು ಇಸ್ರೇಲರಾಗಿರಲಿಲ್ಲ. ಅವರು
ಇಸ್ರೇಲರು ದೇಶವನ್ನು ವಶಪಡಿಸಿಕೊಂಡಾಗ ಅಲ್ಲಿದ್ದ
ನಿವಾಸಿಗಳನ್ನು ಓಡಿಸದೆ ಬಿಟ್ಟವರ ಸಂತತಿಯವ
ರಾಗಿದ್ದರು. ಅವರು ಈಗಲೂ ಅಲ್ಲಿಯೇ ಇದ್ದಾರೆ.
9ಸೊಲೊಮೋನನು ಇಸ್ರೇಲರಲ್ಲಿ ಯಾರನ್ನೂ ಗುಲಾಮ
ರನ್ನಾಗಿ ಮಾಡಲಿಲ್ಲ. ಅವರು ಅವನ ಸೈನಿಕರಾಗಿದ್ದರು;
ಸೇನಾಧಿಪತಿಗಳು ರಥಾಶ್ವಬಲದ ಅಧಿಪತಿಗಳಾಗಿದ್ದರು;
10ಇನ್ನು ಕೆಲವರು ರಾಜ್ಯಾಡಳಿತದ ಅಧಿಪತಿಗಳಾಗಿದ್ದರು;
ಇನ್ನೂರೈವತ್ತು ಮಂದಿಯ ಮೇಲೆ ಮೇಲ್ವಿಚಾರಣೆ
ಮಾಡುವ ಅಧಿಕಾರಿಗಳೂ ಆಗಿದ್ದರು.

11ಸೊಲೊಮೋನನು ದಾವೀದ ನಗರದಲ್ಲಿದ್ದ
ಫರೋಹನ ಕುಮಾರ್ತೆಯನ್ನು ಆಕೆಗಾಗಿ ಕಟ್ಟಿದ ಅರ
ಮನೆಗೆ ಕರೆಸಿದನು. ‘‘ನನ್ನ ಹೆಂಡತಿಯು ದಾವೀದನ
ಮನೆಯಲ್ಲಿ ವಾಸಿಸಬಾರದು. ಯಾಕಂದರೆ ದೇವರ
ಒಡಂಬಡಿಕೆಯ ಪೆಟ್ಟಿಗೆ ಇರುವ ಸ್ಥಳಗಳು ಪರಿಶುದ್ಧ
ವಾಗಿವೆ’’ ಎಂದು ಸೊಲೊಮೋನನು ಅಂದುಕೊಂಡನು.

12ಅನಂತರ ಸೊಲೊಮೋನನು ದೇವಾಲಯದ
ಮಂಟಪದ ಮುಂದೆ ತಾನು ಕಟ್ಟಿಸಿದ ಯಜ್ಞವೇದಿಕೆಯ
ಮೇಲೆ ಯೆಹೋವನಿಗೆ ಸರ್ವಾಂಗಹೋಮಗಳನ್ನು
ಅರ್ಪಿಸಿದನು. 13ಮೋಶೆಯ ಅಪ್ಪಣೆಯ ಪ್ರಕಾರ ಪ್ರತಿ
ನಿತ್ಯವೂ ಸಬ್ಬತ್‌ದಿನಗಳಲ್ಲಿಯೂ ಅಮಾವಾಸ್ಯೆಯ
ದಿನಗಳಲ್ಲಿಯೂ ವರ್ಷದ ಮೂರು ಹಬ್ಬದ ದಿನ
ಗಳಲ್ಲಿಯೂ (ಹುಳಿಯಿಲ್ಲದ ರೊಟ್ಟಿಯ ಹಬ್ಬ, ವಾರಗಳ
ಹಬ್ಬ ಮತ್ತು ಪರ್ಣಶಾಲೆಗಳ ಹಬ್ಬ) ಆಯಾ ದಿನಗಳಲ್ಲಿ
ಯಜ್ಞಗಳನ್ನು ಸಮರ್ಪಿಸುತ್ತಿದ್ದನು. 14ದಾವೀದನು
ಹೇಳಿದ ಪ್ರಕಾರ ಸೊಲೊಮೋನನು ಯಾಜಕರನ್ನು
ಸರತಿಯ ಪ್ರಕಾರ ಸೇವೆಗೆ ನೇಮಿಸಿದನು. ಲೇವಿಯರನ್ನು
ಆಯಾಕೆಲಸಕ್ಕೆ ನೇಮಿಸಿದನು. ಅವರು ಗಾಯನ
ದಲ್ಲಿಯೂ ಯಾಜಕರ ಕೆಲಸಗಳಲ್ಲಿ ಸಹಕಾರಿ
ಗಳಾಗಿಯೂ ದೇವಾಲಯದ ಕೆಲಸದಲ್ಲಿ ಪಾಲುತೆಗೆದು
ಕೊಂಡರು. ದ್ವಾರಪಾಲಕರ ಕೆಲಸಕ್ಕೆ ಸೊಲೊಮೋನನು
ಜನರನ್ನು ಆರಿಸಿ ಅವರಿಗೆ ದ್ವಾರಗಳನ್ನು ನೇಮಿಸಿದನು.
ದೇವಮನುಷ್ಯನಾದ ದಾವೀದನು ಹೀಗೆಯೇ ಮಾಡ
ಬೇಕೆಂದು ತಿಳಿಸಿದ್ದನು. 15ಸೊಲೊಮೋನನು ಯಾಜಕರಿ
ಗಾಗಲೀ ಲೇವಿಯರಿಗಾಗಲೀ ಕೊಟ್ಟ ಆಜ್ಞೆಗಳನ್ನು
ಯಾರೂ ಬದಲಿಸಲಿಲ್ಲ; ಅವುಗಳಿಗೆ ಯಾರೂ
ಅವಿಧೇಯರಾಗಲಿಲ್ಲ; ಬೆಲೆಬಾಳುವ ವಸ್ತುಗಳ
ಸಂಗ್ರಹಣ ಕಾರ್ಯದಲ್ಲೂ ಅವರು ಜಾಗರೂಕ
ರಾಗಿದ್ದರು.

16ದೇವಾಲಯವನ್ನು ಕಟ್ಟುವ ಕಾರ್ಯವು ಪ್ರಾರಂಭ
ದಿಂದ ಹಿಡಿದು ಕೊನೆಯ ತನಕ ಎಲ್ಲವೂ ಯೋಜನೆಗನು
ಸಾರವಾಗಿ ನಡೆಯಿತು. ಹೀಗೆ ದೇವಾಲಯದ ಕಾರ್ಯ
ವೆಲ್ಲಾ ಮುಕ್ತಾಯವಾಯಿತು.

17ಆ ಬಳಿಕ ಸೊಲೊಮೋನನು ಕೆಂಪು ಸಮುದ್ರದ
ತೀರದಲ್ಲಿದ್ದ ಎಚ್ಯೋನ್ಗೆಬೆರ್ ಮತ್ತು ಏಲೋತ್ ಎಂಬ
ಪಟ್ಟಣಗಳಿಗೆ ಹೋದನು. 18ಹೂರಾಮನು ಸೊಲೊ-
ಮೋನನಿಗೋಸ್ಕರ ಹಡಗುಗಳನ್ನು ಕಳುಹಿಸಿದನು. ಅವನ
ಜನರೇ ಅದನ್ನು ನಡೆಸಿದರು. ಅವರು ಒಳ್ಳೆಯ ನುರಿತ
ನಾವಿಕರಾಗಿದ್ದರು. ಹೂರಾಮನ ನಾವಿಕರು ಸೊಲೊ-
ಮೋನನ ಸೇವಕರೊಂದಿಗೆ ಓಫೀರ್ ದೇಶಕ್ಕೆ ಹೋಗಿ
ಅಲ್ಲಿಂದ ಹದಿನೇಳು ಟನ್ ಬಂಗಾರವನ್ನು ಸೊಲೊ-
ಮೋನನಿಗೆ ತಂದುಕೊಟ್ಟರು.

### ಶೆಬದ ರಾಣಿಯು ಸೊಲೊಮೋನನನ್ನು ಸಂದರ್ಶಿಸಿದ್ದು

9 ಸೊಲೊಮೋನನ ಪ್ರಖ್ಯಾತಿಯನ್ನು ಶೆಬದ
ರಾಣಿಯು ಕೇಳಿ ಅವನನ್ನು ಕಠಿಣವಾದ ಪ್ರಶ್ನೆ
ಗಳಿಂದ ಪರೀಕ್ಷಿಸುವದಕ್ಕಾಗಿ ಜೆರುಸಲೇಮಿಗೆ ಬಂದಳು.
ಆಕೆಯು ದೊಡ್ಡ ಪರಿವಾರದೊಂದಿಗೆ ಬಂದಳು. ಜೊತೆಗೆ
ಒಂಟೆಗಳ ಮೇಲೆ ಸುಗಂಧ ದ್ರವ್ಯವನ್ನೂ ಅಪರಿಮಿತವಾದ

ಬಂಗಾರವನ್ನೂ ವಜ್ರವೈಢೂರ್ಯಗಳನ್ನೂ ಹೇರಿ
ಕೊಂಡು ಬಂದಳು. ಅಲ್ಲಿ ಆಕೆ ಸೊಲೊಮೋನನ ಸಂಗಡ
ಮಾತನ್ನಾಡಿ ತನ್ನಲ್ಲಿದ್ದ ಎಷ್ಟೋ ಪ್ರಶ್ನೆಗಳನ್ನು ಕೇಳಿದಳು.
2ಅವನು ಆಕೆಯ ಪ್ರಶ್ನೆಗಳಿಗೆಲ್ಲಾ ಉತ್ತರಿಸಿದನು. ಆಕೆಯ
ಯಾವ ಪ್ರಶ್ನೆಯೂ ಅವನಿಗೆ ಕಷ್ಟಕರವೆನಿಸಲಿಲ್ಲ. 3ಶೆಬದ
ರಾಣಿಯು ಅವನ ಜ್ಞಾನವನ್ನೂ ಅವನು ಕಟ್ಟಿಸಿದ ಮನೆ
ಗಳನ್ನೂ ನೋಡಿದಳು. 4ಸೊಲೊಮೋನನ ಮೇಜಿನ
ಮೇಲೆ ಇಟ್ಟಿರುವ ಆಹಾರವನ್ನು ನೋಡಿದಳು. ಅವನ
ಸೇವಕರು ಮಾಡುವ ಸೇವೆಯ ರೀತಿಯನ್ನು ಪರಿ
ಶೀಲಿಸಿದಳು. ಅವರು ಧರಿಸುವ ಉಡುಪು, ಸಮವಸ್ತ್ರ
ಗಳು, ದೇವಾಲಯಕ್ಕೆ ಹೋಗುವಾಗ ಮಾಡುವ
ಮೆರವಣಿಗೆಗಳನ್ನು ಮತ್ತು ಯಜ್ಞಗಳನ್ನು ನೋಡಿದಳು.
ಪ್ರತಿಯೊಂದು ವಿಷಯವನ್ನು ಆಕೆ ಗಮನಿಸಿದಾಗ ಅಚ್ಚರಿ
ಗೊಂಡಳು. 5ಆಕೆ ಅರಸನಾದ ಸೊಲೊಮೋನನಿಗೆ,
“ನನ್ನ ದೇಶದಲ್ಲಿ ನಾನು ನಿನ್ನ ವಿಷಯವಾಗಿ ಕೇಳಿದ
ಸಂಗತಿಗಳು, ನಿನ್ನ ಜ್ಞಾನ, ನಿನ್ನ ಕೆಲಸಕಾರ್ಯಗಳು
ಎಲ್ಲವೂ ಸತ್ಯವಾಗಿವೆ. 6ನಾನು ಇಲ್ಲಿಗೆ ಬಂದು ಅವು
ಗಳನ್ನೆಲ್ಲಾ ಕಣ್ಣಾರೆ ನೋಡುವ ತನಕ ನಾನು ಅವುಗಳನ್ನು
ನಂಬಿರಲಿಲ್ಲ. ಆದರೆ ನಾನು ಕೇಳಿದ್ದು ನಿನ್ನ ಜ್ಞಾನದ
ಅರ್ಧದಷ್ಟು ಇಲ್ಲವೆಂದು ಈಗ ನನಗೆ ತಿಳಿಯಿತು. ನಾನು
ಕೇಳಿದ್ದಕ್ಕಿಂತಲೂ ನೀನು ಮಹಾಜ್ಞಾನಿಯಾಗಿರುವೆ.
7ನಿನ್ನ ಹೆಂಡತಿಯರೂ ನಿನ್ನ ಅಧಿಕಾರಿಗಳೂ ಧನ್ಯರು. ನಿನ್ನ
ಸೇವೆಮಾಡುವ ಸೇವಕರು ನಿನ್ನ ಜ್ಞಾನೋಪದೇಶವನ್ನು
ಯಾವಾಗಲೂ ಕೇಳುವರು. 8ನಿನ್ನ ದೇವರಿಗೆ ಸ್ತೋತ್ರ
ವಾಗಲಿ. ಆತನು ನಿನ್ನಲ್ಲಿ ಸಂತೋಷಿಸಿ ತನ್ನ ಸಿಂಹಾಸನದಲ್ಲಿ
ನಿನ್ನನ್ನು ಕುಳ್ಳಿರಿಸಿದ್ದಾನೆ. ನಿನ್ನ ದೇವರು ಇಸ್ರೇಲನ್ನು
ಪ್ರೀತಿಸುತ್ತಾನೆ ಮತ್ತು ಶಾಶ್ವತವಾಗಿ ಪೋಷಿಸುತ್ತಾನೆ.
ಅದಕ್ಕಾಗಿಯೇ ನ್ಯಾಯವಾದದ್ದನ್ನೂ ಸರಿಯಾದದ್ದನ್ನೂ
ಮಾಡುವುದಕ್ಕಾಗಿ ನಿನ್ನನ್ನು ಇಸ್ರೇಲಿನ ಅರಸನನ್ನಾಗಿ
ಮಾಡಿದ್ದಾನೆ.”

9ಆ ಬಳಿಕ ಶೆಬದ ರಾಣಿಯು ಸೊಲೊಮೋನ್
ಅರಸನಿಗೆ ನಾಲ್ಕು ಸಾವಿರದ ಎಂಭತ್ತು ಕಿಲೋಗ್ರಾಂ.
ಬಂಗಾರ, ಲೆಕ್ಕವಿಲ್ಲದಷ್ಟು ಸುಗಂಧದ್ರವ್ಯಗಳು ಮತ್ತು
ಬೆಲೆಬಾಳುವ ವಜ್ರಗಳನ್ನು ಕೊಟ್ಟಳು. ಅಷ್ಟು ಅತ್ಯುತ್ತಮ
ವಾದ ಸುಗಂಧದ್ರವ್ಯಗಳನ್ನು ಯಾರೂ ಸೊಲೊಮೋನ
ನಿಗೆ ಕೊಟ್ಟಿರಲಿಲ್ಲ.

10ಹೂರಾಮನ ಮತ್ತು ಸೊಲೊಮೋನನ ಸೇವಕರು
ಓಫೀರಿನಿಂದ ಬಂಗಾರವನ್ನು ತಂದರು; ಅಲ್ಲದೆ
ಸುಗಂಧದ ಮರಗಳನ್ನೂ ವಜ್ರವೈಢೂರ್ಯಗಳನ್ನೂ
ತಂದರು. 11ಸುಗಂಧದ ಮರಗಳಿಂದ ಸೊಲೊಮೋನನು
ದೇವಾಲಯದ ಮತ್ತು ಅರಮನೆಯ ಮೆಟ್ಟಲುಗಳನ್ನು
ಮಾಡಿಸಿದನು; ಅಲ್ಲದೆ ಗಾಯಕರಿಗಾಗಿ ಹಾರ್ಪ್ ಮತ್ತು
ಲೈರ್ ವಾದ್ಯಗಳನ್ನೂ ಅದರಿಂದ ತಯಾರಿಸಿದನು.
ಯೆಹೂದ ಪ್ರಾಂತ್ಯದಲ್ಲಿ ಯಾರೂ ಅಂತಹ ಸುಂದರ
ವಾದ ವಸ್ತುಗಳನ್ನು ನೋಡಿರಲಿಲ್ಲ.

12ಶೆಬದ ರಾಣಿಯು ಕೇಳಿದ್ದನ್ನೆಲ್ಲಾ ಸೊಲೊ-
ಮೋನನು ಕೊಟ್ಟನು. ಆಕೆಯು ಅವನಿಗೆ ತಂದದ್ದಕ್ಕಿಂತ
ಹೆಚ್ಚಾಗಿ ಆಕೆಗೆ ಕೊಟ್ಟನು. ಅನಂತರ ಶೆಬದ ರಾಣಿಯೂ
ಆಕೆಯ ಪರಿವಾರವೂ ತಮ್ಮ ದೇಶಕ್ಕೆ ತೆರಳಿದರು.

### ಸೊಲೊಮೋನನ ಅಪರಿಮಿತವಾದ ಐಶ್ವರ್ಯ

13ಸೊಲೊಮೋನನು ಒಂದು ವರ್ಷದಲ್ಲಿ ಇಪ್ಪತ್ತೆರಡು
ಸಾವಿರದ ಆರುನೂರ ನಲವತ್ತನಾಲ್ಕು ಕಿಲೋ.ಗ್ರಾಂ.
ಬಂಗಾರವನ್ನು ಸಂಗ್ರಹಿಸಿದನು. 14ಇತರ ದೇಶಗಳ
ವ್ಯಾಪಾರಸ್ಥರು: ಅರೇಬಿಯದ ಎಲ್ಲಾ ರಾಜರುಗಳು
ಮತ್ತು ದೇಶಾಧಿಪತಿಗಳು ಸೊಲೊಮೋನನಿಗೆ ಬೆಳ್ಳಿ
ಬಂಗಾರಗಳನ್ನು ತಂದುಕೊಡುತ್ತಿದ್ದರು. 15ಸೊಲೊ-
ಮೋನನು ಇನ್ನೂರು ದೊಡ್ಡ ಗಾತ್ರದ ಗುರಾಣಿಗಳನ್ನು
ಚಿನ್ನದ ತಗಡಿನಿಂದ ಮಾಡಿಸಿದನು. ಪ್ರತಿಯೊಂದು
ಗುರಾಣಿಗೆ ಮೂರು ಕಿಲೋ. ಗ್ರಾಂ.ಗಳಷ್ಟು ಚಿನ್ನವು
ಹಿಡಿಯಿತು. 16ಇದಲ್ಲದೆ ಮುನ್ನೂರು ಸಣ್ಣ ಗುರಾಣಿ
ಗಳನ್ನೂ ಸೊಲೊಮೋನನು ಚಿನ್ನದ ತಗಡಿನಿಂದ
ಮಾಡಿಸಿದನು; ಒಂದೊಂದು ಗುರಾಣಿಗೆ ಮೂರು
ಮುಕ್ಕಾಲು ಪೌಂಡ್ ಬಂಗಾರ ಹಿಡಿಯಿತು. ಈ ಗುರಾಣಿ
ಗಳನ್ನೆಲ್ಲಾ ಸೊಲೊಮೋನನು “ಲೆಬನೋನಿನ” ತೋಪು
ಎಂಬ ಅರಮನೆಯಲ್ಲಿ ಶೇಖರಿಸಿಟ್ಟನು.

17ರಾಜನಾದ ಸೊಲೊಮೋನನು ದಂತದಿಂದ ಒಂದು
ದೊಡ್ಡ ಸಿಂಹಾಸನವನ್ನು ಮಾಡಿಸಿದನು. ಸಿಂಹಾಸನವನ್ನು
ಅಪ್ಪಟ ಬಂಗಾರದ ತಗಡಿನಿಂದ ಹೊದಿಸಿದನು.
18ಸಿಂಹಾಸನವನ್ನು ಹತ್ತಲು ಆರು ಮೆಟ್ಟಲುಗಳಿದ್ದವು.
ಅದಕ್ಕೆ ಬಂಗಾರದಿಂದ ಮಾಡಿದ ಪಾದಪೀಠವಿತ್ತು.
ಸಿಂಹಾಸನದ ಎರಡು ಕಡೆಗಳಲ್ಲೂ ಕೈಗಳನ್ನಿಡಲು
ಏರ್ಪಾಟು ಮಾಡಲಾಗಿತ್ತು; ಅವುಗಳ ಸಮೀಪದಲ್ಲಿ
ಎರಡು ಸಿಂಹಗಳ ಆಕೃತಿಯನ್ನು ಮಾಡಿಟ್ಟಿದ್ದರು. 19ಆರು
ಮೆಟ್ಟಲುಗಳ ಮೇಲೆ ಹನ್ನೆರಡು ಸಿಂಹಗಳ ಆಕೃತಿಯನ್ನು
ಇಟ್ಟಿದ್ದರು. ಪ್ರತಿಯೊಂದು ಮೆಟ್ಟಲಿನ ಎರಡೂ
ಕಡೆಗಳಲ್ಲಿ ಒಂದೊಂದು ಸಿಂಹದ ಆಕೃತಿಯಿತ್ತು. ಇಂಥಾ
ಸಿಂಹಾಸನವು ಬೇರೆ ಯಾವ ರಾಜ್ಯದಲ್ಲಿಯೂ ಇರಲಿಲ್ಲ.
20ಸೊಲೊಮೋನನು ಕುಡಿಯುವ ಪಾತ್ರೆಗಳೆಲ್ಲಾ
ಬಂಗಾರದವುಗಳೇ. “ಲೆಬನೋನಿನ” ತೋಪು ಎಂಬ
ಅರಮನೆಯಲ್ಲಿ ಇಟ್ಟಿದ್ದ ಎಲ್ಲಾ ವಸ್ತುಗಳು ಅಪ್ಪಟ
ಬಂಗಾರದಿಂದಲೇ ಮಾಡಿದವುಗಳಾಗಿದ್ದವು. ಸೊಲೊ-
ಮೋನನ ಕಾಲದಲ್ಲಿ ಬೆಳ್ಳಿಗೆ ಬೆಲೆಯೇ ಇರಲಿಲ್ಲ.
21ರಾಜನಾದ ಸೊಲೊಮೋನನ ಬಳಿಯಲ್ಲಿ ತಾರ್ಷೀಷಿಗೆ
ಹೋಗಲು ಹಡಗುಗಳಿದ್ದವು. ಹೂರಾಮನ ನಾವಿಕರು
ಅವುಗಳನ್ನು ನಡಿಸಿದರು. ಮೂರು ವರ್ಷಕ್ಕೊಮ್ಮೆ

ಹಡಗುಗಳು ತಾರ್ಷೀಷಿನಿಂದ ಹಿಂದಿರುಗುತ್ತಿದ್ದವು. ಅವು
ಚಿನ್ನ, ಬೆಳ್ಳಿ, ದಂತ, ಕೋತಿ ಮತ್ತು ನವಿಲುಗಳನ್ನು
ಸೊಲೊಮೋನನಿಗೆ ತರುತ್ತಿದ್ದವು.
22ರಾಜನಾದ ಸೊಲೊಮೋನನು ಭೂಲೋಕದ
ಎಲ್ಲಾ ರಾಜರುಗಳಿಗಿಂತ ಜ್ಞಾನದಲ್ಲಿಯೂ ಐಶ್ವರ್ಯ
ದಲ್ಲಿಯೂ ಹೆಚ್ಚು ಪ್ರಸಿದ್ಧನಾದನು. 23ದೇವರು ಅವನಿಗೆ
ದಯಪಾಲಿಸಿದ ಜ್ಞಾನವನ್ನು ನೋಡಿ ಅವನಿಂದ ಜ್ಞಾನ
ವಾಕ್ಯಗಳನ್ನು ಕೇಳಲು ಲೋಕದ ರಾಜರುಗಳು ಅವನ
ಬಳಿಗೆ ಬರುತ್ತಿದ್ದರು. 24ಪ್ರತಿ ವರ್ಷವೂ ಆ ರಾಜರುಗಳು
ಸೊಲೊಮೋನನಿಗೆ ಬಹುಮಾನಗಳನ್ನು ತರುತ್ತಿದ್ದರು.
ಬೆಳ್ಳಿಬಂಗಾರದ ವಸ್ತುಗಳನ್ನು, ಬಟ್ಟೆಗಳನ್ನು, ಆಯುಧ
ಗಳನ್ನು, ಸುಗಂಧವಸ್ತುಗಳನ್ನು, ಕುದುರೆಗಳನ್ನು ಮತ್ತು
ಹೇಸರಕತ್ತೆಗಳನ್ನು ಕಾಣಿಕೆಯಾಗಿ ಅವನಿಗೆ
ಕೊಡುತ್ತಿದ್ದರು.
25ಸೊಲೊಮೋನನ ರಥಗಳಿಗೂ ರಥಾಶ್ವಗಳಿಗೂ
ನಾಲ್ಕು ಸಾವಿರ ಲಾಯಗಳಿದ್ದವು. ಅವನ ಬಳಿಯಲ್ಲಿ
ಹನ್ನೆರಡು ಸಾವಿರ ರಾಹುತರು ಇದ್ದರು. ಅವರನ್ನು
ಪ್ರತ್ಯೇಕ್ಯವಾದ ಪಟ್ಟಣಗಳಲ್ಲಿಯೂ ಜೆರುಸಲೇಮಿ
ನಲ್ಲಿಯೂ ಇರಿಸಿದನು. 26ಯೂಫ್ರೇಟೀಸ್ ನದಿಯಿಂದ
ಹಿಡಿದು ಫಿಲಿಷ್ಟಿಯರ ರಾಜ್ಯ ಮತ್ತು ಈಜಿಪ್ಟಿನ ಮೇರೆಯ
ತನಕವಿದ್ದ ಎಲ್ಲಾ ಅರಸರುಗಳಿಗೆ ಸೊಲೊಮೋನನೇ
ರಾಜನಾಗಿದ್ದನು. 27ಸೊಲೊಮೋನನಿಂದಾಗಿ ಜೆರುಸ
ಲೇಮಿನಲ್ಲಿ ಬೆಳ್ಳಿಯು ಹೆಚ್ಚಾಗಿ ಕಲ್ಲುಗಳಷ್ಟು ಸಾಮಾನ್ಯ
ವಾಗಿತ್ತು. ಮಾತ್ರವಲ್ಲದೆ ದೇವದಾರು ಮರಗಳು ಬೆಟ್ಟ
ಪ್ರದೇಶದಲ್ಲಿ ಬೆಳೆಯುವ ಸಿಕಮೋರ್ ಮರಗಳಂತೆ
ಧಾರಾಳವಾಗಿದ್ದವು.
28ಜನರು ಈಜಿಪ್ಟ್ ಮತ್ತು ಬೇರೆ ದೇಶಗಳಿಂದ
ಕುದುರೆಗಳನ್ನು ತಂದು ಕೊಡುತ್ತಿದ್ದರು.

### ಸೊಲೊಮೋನನ ಮರಣ

29ಸೊಲೊಮೋನನು ಪ್ರಾರಂಭದಿಂದ ಅಂತ್ಯದ ತನಕ
ಮಾಡಿದ ಎಲ್ಲಾ ವಿಷಯಗಳನ್ನು ಪ್ರವಾದಿಯಾದ
ನಾತಾನನು ಬರೆದ ಲೇಖನಗಳಲ್ಲಿಯೂ, ಶೀಲೋವದ
ಅಹೀಯನ ಪ್ರವಾದನೆಯಲ್ಲಿಯೂ ಮತ್ತು ದೇವದರ್ಶಿ
ಯಾದ ಇದ್ದೋವಿನ ದರ್ಶನಗಳ ಪುಸ್ತಕದಲ್ಲಿಯೂ
ಬರೆಯಲಾಗಿದೆ. ದೇವದರ್ಶಿಯಾದ ಇದ್ದೋ, ನೆಬಾಟನ
ಮಗನಾದ ಯಾರೊಬ್ಬಾಮನ ವಿಷಯವಾಗಿಯೂ
ಬರೆದಿದ್ದಾನೆ. 30ಜೆರುಸಲೇಮಿನಲ್ಲಿ ಸೊಲೊಮೋನನು
ನಲವತ್ತು ವರ್ಷಗಳ ಕಾಲ ಇಸ್ರೇಲರನ್ನು ಆಳಿದನು. 31ಆ
ಬಳಿಕ ಸೊಲೊಮೋನನು ತನ್ನ ಪೂರ್ವಿಕರೊಂದಿಗೆ
ಸೇರಿದನು. ಅವನನ್ನು ದಾವೀದನಗರದಲ್ಲಿ ಹೂಳಿಟ್ಟರು.
ಸೊಲೊಮೋನನ ನಂತರ ಅವನ ಮಗನಾದ
ರೆಹಬ್ಬಾಮನು ಅರಸನಾದನು.

### ರೆಹಬ್ಬಾಮನ ಅವಿವೇಕಿತನ

10 ರೆಹಬ್ಬಾಮನು ಶೆಕೆಮಿಗೆ ಹೋದನು.
ಯಾಕಂದರೆ ಅಲ್ಲಿ ಇಸ್ರೇಲ್ ಜನರೆಲ್ಲಾ
ಅವನನ್ನು ಅರಸನನ್ನಾಗಿ ಮಾಡಲು ಕೂಡಿ ಬಂದಿದ್ದರು.
2ಯಾರೊಬ್ಬಾಮನು ರಾಜನಾದ ಸೊಲೊಮೋನನ ಬಳಿ
ಯಿಂದ ಓಡಿಹೋಗಿ ಈಜಿಪ್ಟಿನಲ್ಲಿ ವಾಸಿಸುತ್ತಿದ್ದನು.
ಅವನು ನೆಬಾಟನ ಮಗನು. ರೆಹಬ್ಬಾಮನು ರಾಜ
ನಾದನೆಂಬ ಸುದ್ದಿ ತಿಳಿದಕೂಡಲೇ ಅವನು ಈಜಿಪ್ಟಿನಿಂದ
ಹಿಂತಿರುಗಿಬಂದನು. 3ಇಸ್ರೇಲರೇ ಯಾರೊಬ್ಬಾಮನನ್ನು
ತಮ್ಮ ಬಳಿಗೆ ಕರೆಯಿಸಿದರು. ಆಗ ಯಾರೊಬ್ಬಾಮನೂ
ಇಸ್ರೇಲರೂ ರೆಹಬ್ಬಾಮನ ಬಳಿಗೆ ಹೋಗಿ, 4''ರೆಹ-
ಬ್ಬಾಮನೇ, ನಿನ್ನ ತಂದೆಯು ನಮ್ಮ ಮೇಲೆ ತುಂಬ
ಭಾರವನ್ನು ಹೊರಿಸಿದ್ದನು. ಆ ಭಾರವನ್ನು ನೀನು ಕಡಿಮೆ
ಮಾಡಬೇಕು. ಆಗ ನಾವು ನಿನ್ನ ಸೇವೆಮಾಡುವೆವು''
ಅಂದರು.
5ಅದಕ್ಕೆ ರೆಹಬ್ಬಾಮನು, ''ನೀವು ಮೂರು ದಿನಗಳ
ನಂತರ ನನ್ನ ಬಳಿಗೆ ಬನ್ನಿರಿ'' ಎಂದು ಹೇಳಿ ಅವರನ್ನು
ಕಳುಹಿಸಿಬಿಟ್ಟನು.
6ರೆಹಬ್ಬಾಮನು ತನ್ನ ತಂದೆಗೆ ಮಂತ್ರಾಲೋಚಕ
ರಾಗಿದ್ದ ಹಿರಿಯರೊಡನೆ ಮಾತಾಡಿ, ''ಇವರಿಗೆ ನಾನು
ಏನು ಉತ್ತರ ಕೊಡಬೇಕು?'' ಎಂದು ವಿಚಾರಿಸಿದನು.
7ಹಿರಿಯರು ಅವನಿಗೆ, ''ನೀನು ಅವರಿಗೆ ಕರುಣೆ
ಯನ್ನು ತೋರಿ, ಅವರನ್ನು ಮೆಚ್ಚಿಸಿ, ಅವರಿಗೆ ಒಳ್ಳೆಯ
ಮಾತುಗಳನ್ನಾಡಿದರೆ ಅವರು ನಿರಂತರವಾಗಿ ನಿನ್ನ
ಸೇವೆಮಾಡುವರು'' ಎಂದು ಹೇಳಿದರು.
8ಆದರೆ ರೆಹಬ್ಬಾಮನು ಹಿರಿಯರ ಸಲಹೆಯನ್ನು
ಕೇಳಲಿಲ್ಲ. ಅವನೊಂದಿಗೆ ಬೆಳೆದ ಅವನ ಸಮಪ್ರಾಯದ
ಯೌವನಸ್ಥರನ್ನು ವಿಚಾರಿಸಿ. 9''ನನ್ನ ತಂದೆಯು ಅವರಿಗೆ
ಕೊಟ್ಟ ಭಾರವನ್ನು ಹಗುರ ಮಾಡಲು ಜನರು ಕೇಳುತ್ತಿ
ದ್ದಾರೆ. ನಾನು ಅವರಿಗೆ ಏನು ಉತ್ತರ ಕೊಡಬೇಕು?''
ಎಂದು ಕೇಳಿದನು.
10ಆ ಯೌವನಸ್ಥರು ''ನೀನು ಅವರಿಗೆ, 'ನನ್ನ ತಂದೆಯ
ಸೊಂಟಕ್ಕಿಂತ ನನ್ನ ಕಿರಿಬೆರಳು ದಪ್ಪವಾಗಿದೆ. 11ನನ್ನ
ತಂದೆಯು ಭಾರವಾದ ನೊಗವನ್ನು ನಿಮ್ಮ ಮೇಲೆ ಹೊರಿಸಿ
ದನು. ನಾನಾದರೋ ಅದನ್ನು ಅಧಿಕಗೊಳಿಸುವೆನು. ನನ್ನ
ತಂದೆಯು ಚಾಟಿಯಿಂದ ನಿಮ್ಮನ್ನು ಶಿಕ್ಷಿಸಿದನು. ನಾನಾ
ದರೋ ಮುಳ್ಳುಕೊರಡೆಗಳಿಂದ ನಿಮ್ಮನ್ನು ಶಿಕ್ಷಿಸುವೆನು'
ಎಂದು ಹೇಳು'' ಎಂಬುದಾಗಿ ಸಲಹೆ ಮಾಡಿದರು.
12ಮೂರು ದಿವಸಗಳ ಬಳಿಕ ಯಾರೊಬ್ಬಾಮನೂ
ಎಲ್ಲಾ ಇಸ್ರೇಲರು ರೆಹಬ್ಬಾಮನ ಬಳಿಗೆ ಬಂದರು.
ಮೂರು ದಿನಗಳ ನಂತರ ಬನ್ನಿ ಎಂದು ರೆಹಬ್ಬಾಮನೇ
ಅವರಿಗೆ ಹೇಳಿದ್ದನು. 13ಆಗ ಅರಸನಾದ ರೆಹಬ್ಬಾಮನು
ಹಿರಿಯರ ಸಲಹೆಯನ್ನು ತಿರಸ್ಕರಿಸಿ ಜನರೊಂದಿಗೆ ಬಹಳ

ಕೀಳಾಗಿ ಮಾತನಾಡಿದನು. 14ಯೌವನಸ್ಥರು ಹೇಳಿದ
ಪ್ರಕಾರ ರೆಹಬ್ಬಾಮನು ಅವರಿಗೆ, ‘‘ನನ್ನ ತಂದೆಯು
ನಿಮಗೆ ಭಾರವಾದ ನೊಗವನ್ನು ಹೊರಿಸಿದನು. ನಾನಾ
ದರೋ ಅದನ್ನು ಇನ್ನೂ ಅಧಿಕಗೊಳಿಸುವೆನು. ನನ್ನ
ತಂದೆಯು ಚಾಟಿಯಿಂದ ನಿಮ್ಮನ್ನು ಹೊಡೆದನು. ನಾನಾ
ದರೋ ಮುಳ್ಳುಕೊರಡೆಗಳಿಂದ ನಿಮ್ಮನ್ನು ಹೊಡೆಯು
ವೆನು’’ ಅಂದನು. 15ಹೀಗೆ ರೆಹಬ್ಬಾಮನು ಜನರ
ಬೇಡಿಕೆಯನ್ನು ಕೇಳಲಿಲ್ಲ. ಯಾಕಂದರೆ ಇದು ದೇವರ
ಚಿತ್ತವಾಗಿತ್ತು. ದೇವರು ಅಹೀಯನ ಮುಖಾಂತರ
ಯಾರೊಬ್ಬಾಮನಿಗೆ ಹೇಳಿದ ಮಾತು ನೆರವೇರುವಂತೆ
ಹೀಗಾಯಿತು. ಅಹೀಯನು ಶೀಲೋವಿನವನಾಗಿದ್ದನು.
ಯಾರೊಬ್ಬಾಮನು ನೆಬಾಟನ ಮಗನಾಗಿದ್ದನು.

16ರಾಜನಾದ ರೆಹಬ್ಬಾಮನು ತಮ್ಮ ಮಾತನ್ನು ಕೇಳದೆ
ಹೋದದ್ದನ್ನು ಇಸ್ರೇಲರು ನೋಡಿ ಅವನಿಗೆ, ‘‘ನಾವು
ದಾವೀದನ ಕುಟುಂಬದ ಭಾಗವಾಗಿದ್ದೇವೋ? ಇಲ್ಲ.
ನಮಗೆ ಇಷಯನ ಆಸ್ತಿಯಲ್ಲಿ ಪಾಲಿದೆಯೋ? ಇಲ್ಲ.
ಆದುದರಿಂದ ಇಸ್ರೇಲರೇ, ನಾವು ನಮ್ಮ ಮನೆಗಳಿಗೆ
ಹೋಗೋಣ. ದಾವೀದನ ಮಗನು ಅವನ ವಂಶದ
ವರನ್ನೇ ಆಳಲಿ’’ ಎಂದು ಹೇಳಿ ಸೇರಿಬಂದವರೆಲ್ಲಾ ತಮ್ಮ
ಮನೆಗಳಿಗೆ ಹಿಂದಕ್ಕೆ ಕಳುಹಿಸಿದರು. 17ಆದರೆ ಇಸ್ರೇಲ
ರಲ್ಲಿ ಕೆಲವರು ಯೆಹೂದದ ಪಟ್ಟಣಗಳಲ್ಲಿ ವಾಸಿಸು
ತ್ತಿದ್ದರು. ಇವರಿಗೆ ರೆಹಬ್ಬಾಮನೇ ರಾಜನಾದನು.

18ಹದೋರಾಮನು ಬಿಟ್ಟೀ ಕೆಲಸ ಮಾಡುತ್ತಿದ್ದವರ
ಅಧಿಕಾರಿ. ಅವನನ್ನು ರೆಹಬ್ಬಾಮನು ಇಸ್ರೇಲರ ಬಳಿಗೆ
ಕಳುಹಿಸಿದನು. ಆದರೆ ಇಸ್ರೇಲರು ಅವನ ಮೇಲೆ
ಕಲ್ಲೆಸೆದು ಕೊಂದರು. ಇದನ್ನು ನೋಡಿದ ರೆಹಬ್ಬಾಮನು
ಓಡಿಹೋಗಿ ತನ್ನ ರಥವನ್ನು ಏರಿ ಅಲ್ಲಿಂದ ತಪ್ಪಿಸಿಕೊಂಡು
ಜೆರುಸಲೇಮಿಗೆ ಬಂದನು. 19ಅಂದಿನಿಂದ ಇಂದಿನವರೆಗೆ
ಇಸ್ರೇಲರು ದಾವೀದನ ಕುಟುಂಬಕ್ಕೆ ವಿರುದ್ಧವಾದರು.

11 ರೆಹಬ್ಬಾಮನು ಜೆರುಸಲೇಮಿಗೆ ಬಂದು
ಯೆಹೂದ ಮತ್ತು ಬೆನ್ಯಾಮೀನ್ ಕುಲದ ಒಂದು
ಲಕ್ಷ ಎಂಭತ್ತು ಸಾವಿರ ಮಂದಿ ನುರಿತ ಸೈನಿಕರನ್ನು ಒಟ್ಟು
ಸೇರಿಸಿದನು. ಇಸ್ರೇಲರೊಂದಿಗೆ ಯುದ್ಧಮಾಡಿ ಅವರ
ರಾಜ್ಯವನ್ನು ಮತ್ತೆ ಪಡೆದುಕೊಳ್ಳಬೇಕೆಂಬುದೇ ಅವನ
ಉದ್ದೇಶವಾಗಿತ್ತು. 2ಆದರೆ ಯೆಹೋವನ ಮನುಷ್ಯನಾದ
ಶೆಮಾಯನಿಗೆ ಯೆಹೋವನ ಸಂದೇಶವು ಬಂತು,
3‘‘ಶೆಮಾಯನೇ, ನೀನು ಹೋಗಿ ಯೆಹೂದದ ರಾಜ
ನಾದ ರೆಹಬ್ಬಾಮನೊಡನೆ ಮಾತನ್ನಾಡು. ಯೆಹೂದ
ಮತು ಬೆನ್ಯಾಮೀನ್ ಪ್ರಾಂತ್ಯಗಳಲ್ಲಿ ವಾಸವಾಗಿರುವ
ಎಲ್ಲಾ ಇಸ್ರೇಲರೊಂದಿಗೆ ಮಾತನ್ನಾಡು. ಅವರಿಗೆ ಹೀಗೆ
ಹೇಳು: 4ಯೆಹೋವನು ಇಂತೆನ್ನುತ್ತಾನೆ: ನಿಮ್ಮ ಸಹೋ
ದರರೊಂದಿಗೆ ನೀವು ಯುದ್ಧಮಾಡಬಾರದು. ಪ್ರತಿ
ಯೊಬ್ಬರು ತಮ್ಮ ಮನೆಗಳಿಗೆ ಹಿಂತಿರುಗಲಿ. ಯಾಕಂದರೆ
ಇದನ್ನು ನಾನೇ ಮಾಡಿದ್ದೇನೆ.’’ ರೆಹಬ್ಬಾಮನೂ ಅವ
ನೊಂದಿಗಿದ್ದ ಸೈನಿಕರೂ ಯೆಹೋವನ ಸಂದೇಶವನ್ನು
ಕೇಳಿ ಹಿಂತಿರುಗಿದರು. ಅವರು ಯಾರೊಬ್ಬಾಮ
ನೊಂದಿಗೆ ಯುದ್ಧ ಮಾಡಲಿಲ್ಲ.

## ಯೆಹೂದವನ್ನು ರೆಹಬ್ಬಾಮನು ಬಲಗೊಳಿಸಿದ್ದು

5ರೆಹಬ್ಬಾಮನು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದನು.
ಯುದ್ಧದಲ್ಲಿ ರಕ್ಷಿಸಿಕೊಳ್ಳಲು ಅವನು ಯೆಹೂದದಲ್ಲಿ
ಭದ್ರವಾದ ಪಟ್ಟಣಗಳನ್ನು ಕಟ್ಟಿದನು. 6ಬೆತ್ಲೆಹೇಮ್,
ಏತಾಮ್, ತೆಕೋವ, 7ಬೇತ್ಚೂರ್, ಸೋಕೋ, ಅದು
ಲ್ಲಾಮ್, 8ಗತ್, ಮಾರೇಷ, ಜೀಫ್, 9ಅದೋರೈಮ್,
ಲಾಕೀಷ್, ಅಜೇಕ. 10ಚೊರ್ಗ, ಅಯ್ಯಾಲೋನ್ ಮತ್ತು
ಹೆಬ್ರೋನ್ ಎಂಬ ಯೆಹೂದ ಮತ್ತು ಬೆನ್ಯಾಮೀನ್
ಪ್ರಾಂತದ ಪಟ್ಟಣಗಳನ್ನು ದುರಸ್ತಿಪಡಿಸಿ ಭದ್ರಪಡಿಸ
ಲಾಯಿತು.

11ರೆಹಬ್ಬಾಮನು ಈ ಪಟ್ಟಣಗಳಿಗೆ ಅಧಿಪತಿಗಳನ್ನು
ನೇಮಿಸಿದನು; ಆಹಾರಸಾಮ್ರಗಿ, ಎಣ್ಣೆ ದ್ರಾಕ್ಷಾರಸ
ಮುಂತಾದವುಗಳನ್ನು ಸಂಗ್ರಹಿಸಿಟ್ಟನು. 12ಪ್ರತಿ ಯೊಂದು
ಪಟ್ಟಣದಲ್ಲಿಯೂ ಈಟಿಗಳನ್ನು ಮತ್ತು ಗುರಾಣಿಗಳನ್ನು
ಸಂಗ್ರಹಿಸಿಟ್ಟನು; ಹೀಗೆ ಈ ಎಲ್ಲಾ ಪಟ್ಟಣಗಳನ್ನು ಭದ್ರ
ಪಡಿಸಿದನು. ರೆಹಬ್ಬಾಮನು ಯೆಹೂದದ ಮತ್ತು ಬೆನ್ಯಾ
ಮೀನನ ಜನರನ್ನು ಮತ್ತು ಪಟ್ಟಣಗಳನ್ನು ತನ್ನ
ಹತೋಟಿಯಲ್ಲಿ ಇಟ್ಟುಕೊಂಡನು.

13ಇಸ್ರೇಲ್ ಪ್ರಾಂತ್ಯದಲ್ಲಿದ್ದ ಯಾಜಕರೂ ಲೇವಿ
ಯರೂ ರೆಹಬ್ಬಾಮನನ್ನು ಸೇರಿಕೊಂಡರು. 14ಲೇವಿ
ಯರು ತಮಗಿದ್ದ ಗೋಮಾಳಗಳನ್ನೂ ಹೊಲಗದ್ದೆಗಳನ್ನೂ
ಬಿಟ್ಟು ಯೆಹೂದಕ್ಕೂ ಮತ್ತು ಜೆರುಸಲೇಮಿಗೂ
ಬಂದರು. ಯಾಜಕರಾಗಿ ಸೇವೆಮಾಡಲು ಯಾರೊಬ್ಬಾ
ಮನು ಮತ್ತು ಅವನ ಮಕ್ಕಳು ಲೇವಿಯರಿಗೆ ಅನುಮತಿ
ಕೊಡಲಿಲ್ಲವಾದ್ದರಿಂದ ಲೇವಿಯರು ಹೀಗೆ ಮಾಡಿದರು.
15ಯಾರೊಬ್ಬಾಮನು ತನಗೆ ಬೇಕಾದ ಯಾಜಕರನ್ನು
ಆರಿಸಿ ತಾನು ಮಾಡಿಸಿದ ಬಸವನ ಮತ್ತು ಆಡುಗಳ
ಪ್ರತಿಮೆಗಳನ್ನು ಉನ್ನತಸ್ಥಳಗಳಲ್ಲಿ ಪ್ರತಿಷ್ಠಾಪಿಸಿ ಆರಾಧಿ
ಸಲು ನೇಮಿಸಿದನು.

16ಲೇವಿಯರು ಇಸ್ರೇಲನ್ನು ಬಿಟ್ಟು ಬಂದ ಬಳಿಕ
ಇಸ್ರೇಲರಲ್ಲಿ ದೇವರಾದ ಯೆಹೋವನಿಗೆ ನಂಬಿಗಸ್ತರಾಗಿ
ಸೇವಿಸುವವರು ಜೆರುಸಲೇಮ್ ನಗರಕ್ಕೆ ಬಂದು ದೇವ
ರಿಗೆ ಯಜ್ಞಗಳನ್ನು ಅರ್ಪಿಸಿ ಆರಾಧಿಸಿದರು. 17ಅವರೆಲ್ಲ
ಯೆಹೂದರಾಜ್ಯವನ್ನು ಬಲಗೊಳಿಸಿದರು ಮತ್ತು ಸೊಲೊ
ಮೋನನ ಮಗನಾದ ರೆಹಬ್ಬಾಮನೊಂದಿಗೆ ಮೂರು
ವರುಷವಿದ್ದರು. ಯಾಕಂದರೆ ಅವರು ಈ ವರ್ಷಗಳಲ್ಲಿ
ದಾವೀದನಂತೆ ಮತ್ತು ಸೊಲೊಮೋನ ನಂತೆ ದೇವರ
ಮಾರ್ಗದಲ್ಲಿ ನಡೆಯುತ್ತಿದ್ದರು.

## ರೆಹಬ್ಬಾಮನ ಕುಟುಂಬ

[18]ರೆಹಬ್ಬಾಮನು ಯೆರೀಮೋತನ ಮಗಳಾದ
ಮಹ್ಲತ್ ಎಂಬಾಕೆಯನ್ನು ಮದುವೆಯಾದನು. ಆಕೆಯ
ತಾಯಿಯ ಹೆಸರು ಅಬೀಹೈಲ್. ಯೆರೀಮೋತನು
ದಾವೀದನ ಮಗನಾಗಿದ್ದನು. ಅಬೀಹೈಲಳು ಇಷಯನ
ಮಗನಾದ ಎಲೀಯಾಬನ ಮಗಳು. [19]ರೆಹಬ್ಬಾಮನಿಂದ
ಮಹ್ಲತಳು ಈ ಮೂರು ಗಂಡುಮಕ್ಕಳನ್ನು ಪಡೆದಳು:
ಯೆಗೂಷ್, ಶೆಮರ್ಯ ಮತ್ತು ಜಾಹಮ್. [20]ಆಮೇಲೆ
ರೆಹಬ್ಬಾಮನು ಅಬ್ಷಾಲೋಮನ ಮೊಮ್ಮಗಳಾದ ಮಾಕ
ಳನ್ನು ಮದುವೆಯಾದನು. ಆಕೆಯು ಅವನಿಂದ ಅಬೀಯ,
ಅತ್ತೈ, ಜೀಜ ಮತ್ತು ಶೆಲೋಮೀತ್ ಎಂಬ ಮಕ್ಕಳನ್ನು
ಹೆತ್ತಳು.

[21]ರೆಹಬ್ಬಾಮನು ತನ್ನ ಬೇರೆ ಪತ್ನಿಯರಿಗಿಂತಲೂ
ಉಪಪತ್ನಿಯರಿಗಿಂತಲೂ ಮಾಕಳನ್ನು ಹೆಚ್ಚಾಗಿ ಪ್ರೀತಿಸಿ
ದನು. ಮಾಕಳು ಅಬ್ಷಾಲೋಮನ ಮೊಮ್ಮಗಳಾಗಿದ್ದಳು.
ರೆಹಬ್ಬಾಮನಿಗೆ ಹದಿನೆಂಟು ಮಂದಿ ಪತ್ನಿಯರೂ
ಅರವತ್ತು ಮಂದಿ ಉಪಪತ್ನಿಯರೂ ಇದ್ದರು. ಅವನಿಗೆ
ಇಪ್ಪತ್ತೆಂಟು ಗಂಡುಮಕ್ಕಳೂ ಅರವತ್ತು ಹೆಣ್ಣುಮಕ್ಕಳೂ
ಇದ್ದರು.

[22]ರೆಹಬ್ಬಾಮನು ಮಾಕಳ ಮಗನಾದ ಅಬೀಯನನ್ನು
ಅವನ ಸಹೋದರರೊಳಗಿಂದ ನಾಯಕನನ್ನಾಗಿ ಆರಿಸಿ
ದನು. ರೆಹಬ್ಬಾಮನು ಅವನನ್ನು ಅರಸನನ್ನಾಗಿ ಮಾಡ
ಬೇಕೆಂಬುದೇ ಅವನ ಉದ್ದೇಶವಾಗಿತ್ತು. [23]ರೆಹಬ್ಬಾ
ಮನು ವಿವೇಕದಿಂದ ತನ್ನ ಗಂಡುಮಕ್ಕಳನ್ನು ಯೆಹೂದ
ಮತ್ತು ಬೆನ್ಯಾಮೀನ್ ಪ್ರದೇಶಗಳಲ್ಲಿದ್ದ ಕೋಟೆಗಳುಳ್ಳ
ಪಟ್ಟಣಗಳಲ್ಲಿರಿಸಿ ಅವರಿಗೆ ಬೇಕಾದಷ್ಟು ಆಹಾರವನ್ನು
ಸರಬರಾಜು ಮಾಡಿಸಿದನು. ಅವರಿಗೆ ಅನೇಕ ಸ್ತ್ರೀಯ
ರನ್ನು ಹೆಂಡತಿಯರನ್ನಾಗಿ ಒದಗಿಸಿಕೊಟ್ಟನು.

## ಈಜಿಪ್ಟಿನ ರಾಜನಾದ ಶೀಶಕನು ಜೆರುಸಲೇಮಿನ ಮೇಲೆ ಧಾಳಿಮಾಡಿದ್ದು

12 ರೆಹಬ್ಬಾಮನು ಬಲಾಢ್ಯನಾದ ರಾಜನಾಗಿ ತನ್ನ
ರಾಜ್ಯವನ್ನು ಬಲಗೊಳಿಸಿದ ನಂತರ ಅವನೂ
ಯೆಹೂದದ ಜನರೂ ದೇವರಾದ ಯೆಹೋವನ ಕಟ್ಟಳೆ
ಗಳನ್ನು ಅನುಸರಿಸಲು ನಿರಾಕರಿಸಿದರು. [2]ರೆಹಬ್ಬಾಮನ
ಆಳ್ವಿಕೆಯ ಐದನೆಯ ವರುಷದಲ್ಲಿ ಶೀಶಕನು ಬಂದು
ಪಟ್ಟಣಕ್ಕೆ ಮುತ್ತಿಗೆ ಹಾಕಿದನು. ಶೀಶಕನು ಈಜಿಪ್ಟಿನ
ರಾಜ. ರೆಹಬ್ಬಾಮನೂ ಯೆಹೂದ ಪ್ರಾಂತ್ಯದ ಜನರೂ
ಯೆಹೋವನಿಗೆ ಅವಿಧೇಯರಾದದ್ದೇ ಈ ಮುತ್ತಿಗೆಗೆ
ಕಾರಣ. [3]ಶೀಶಕನ ಬಳಿಯಲ್ಲಿ ಹನ್ನೆರಡು ಸಾವಿರ ರಥ
ಗಳು, ಅರವತ್ತು ಸಾವಿರ ರಾಹುತರು ಮತ್ತು ಲೆಕ್ಕಿಸ
ಲಾರದಷ್ಟು ಸೈನಿಕರು ಇದ್ದರು. ಅವನ ಆ ದೊಡ್ಡ ಸೈನ್ಯದಲ್ಲಿ
ಲಿಬ್ಯ, ಇಥಿಯೋಪ್ಯ ಮತ್ತು ಸುಕ್ಕೀಯ ದೇಶದ ಸಿಪಾಯಿ
ಗಳಿದ್ದರು. [4]ಶೀಶಕನು ಯೆಹೂದ ಪ್ರಾಂತ್ಯದ ಪಟ್ಟಣ
ಗಳನ್ನು ವಶಪಡಿಸಿಕೊಂಡು ಜೆರುಸಲೇಮಿನತ್ತ ನಡೆದನು.
[5]ಆಗ ಪ್ರವಾದಿಯಾದ ಶೆಮಾಯನು, ಶೀಶಕನಿಗೆ
ಹೆದರಿಕೊಂಡು ಜೆರುಸಲೇಮಿನಲ್ಲಿ ಒಟ್ಟಾಗಿ ಸೇರಿ
ಬಂದಿದ್ದ ರೆಹಬ್ಬಾಮನ ಮತ್ತು ಇಸ್ರೇಲಿನ ಪ್ರಧಾನರ
ಬಳಿಗೆ ಬಂದು, ‘‘ಯೆಹೋವನು ಹೇಳುವದೇನಂದರೆ,
ರೆಹಬ್ಬಾಮನೇ, ನೀನು ಮತ್ತು ಯೆಹೂದದ ಜನರು
ನನ್ನನ್ನು ತೊರೆದಿದ್ದೀರಿ. ನನ್ನ ಕಟ್ಟಳೆಗಳನ್ನು ಅನುಸರಿಸಲು
ನಿರಾಕರಿಸಿದ್ದೀರಿ. ಈಗ ನಾನು ನಿಮಗೆ ಸಹಾಯಮಾಡದೆ
ಶೀಶಕನನ್ನು ಎದುರಿಸಲು ನಿಮ್ಮನ್ನು ಬಿಟ್ಟುಬಿಡುವೆನು.’’
ಎಂದು ಹೇಳಿದನು.

[6]ಆಗ ಯೆಹೂದ ಪ್ರಾಂತ್ಯದ ನಾಯಕರುಗಳೂ
ರೆಹಬ್ಬಾಮನೂ ತಾವು ಮಾಡಿದ ತಪ್ಪಿಗೆ ಪಶ್ಚಾತ್ತಾಪ ಪಟ್ಟು
ತಮ್ಮನ್ನು ದೇವರ ಮುಂದೆ ತಗ್ಗಿಸಿಕೊಂಡರು. ‘‘ಯೆಹೋ
ವನು ನೀತಿವಂತನೇ ಸರಿ’’ ಎಂದರು.

[7]ಅರಸನೂ ಯೆಹೂದದ ನಾಯಕರೂ ತನ್ನೆದುರಿನಲ್ಲಿ
ತಗ್ಗಿಸಿಕೊಂಡದ್ದನ್ನು ಯೆಹೋವನು ನೋಡಿ ಶೆಮಾಯನ
ಮೂಲಕ ಈ ಸಂದೇಶವನ್ನು ಕಳುಹಿಸಿದನು. ‘‘ಅರಸನೂ
ನಾಯಕರೂ ತಮ್ಮನ್ನು ತಗ್ಗಿಸಿಕೊಂಡದ್ದರಿಂದ ನಾನು
ಅವರನ್ನು ನಾಶಪಡಿಸದೆ ಬೇಗನೆ ರಕ್ಷಿಸುವೆನು. ಜೆರುಸಲೇ
ಮಿನ ಮೇಲೆ ನನ್ನ ಕೋಪವು ಸುರಿಯುವಂತೆ ನಾನು
ಶೀಶಕನನ್ನು ಉಪಯೋಗಿಸುವದಿಲ್ಲ. [3]ಆದರೆ ಜೆರುಸ
ಲೇಮಿನ ಜನರು ಶೀಶಕನ ಸೇವಕರಾಗುವರು. ಯಾಕಂ
ದರೆ ನನ್ನ ಸೇವೆಮಾಡುವುದಕ್ಕೂ ಇತರ ರಾಜರುಗಳ
ಸೇವೆಮಾಡುವುದಕ್ಕೂ ವ್ಯತ್ಯಾಸವಿದೆ ಎಂಬುದನ್ನು ಅವರು
ಅರಿತುಕೊಳ್ಳಬೇಕಾಗಿದೆ.’’

[9]ಶೀಶಕನು ಜೆರುಸಲೇಮಿನೊಳಗೆ ನುಗ್ಗಿ ದೇವಾಲಯ
ದಲ್ಲಿಟ್ಟಿದ್ದ ಭಂಡಾರಗಳನ್ನೆಲ್ಲಾ ಸೂರೆಮಾಡಿದನು.
ರಾಜನ ಅರಮನೆಯಲ್ಲಿದ್ದ ವಸ್ತುಗಳನ್ನೂ ಸೊಲೊ
ಮೋನನು ಮಾಡಿಸಿದ್ದ ಬಂಗಾರದ ಗುರಾಣಿಗಳನ್ನೂ
ಸೂರೆಮಾಡಿ ತನ್ನ ದೇಶಕ್ಕೆ ಒಯ್ದನು. [10]ರೆಹಬ್ಬಾಮನು
ಬಂಗಾರದ ಗುರಾಣಿಗಳ ಬದಲಾಗಿ ಕಂಚಿನ ಗುರಾಣಿ
ಗಳನ್ನು ಮಾಡಿಸಿ ರಾಜನ ಅರಮನೆಯನ್ನು ಕಾಯುವ
ಕಾವಲುಗಾರರ ವಶಕ್ಕೆ ಅವುಗಳನ್ನು ಕೊಟ್ಟನು.
[11]ರಾಜನು ದೇವಾಲಯವನ್ನು ಪ್ರವೇಶಿಸುವಾಗ, ಕಾವಲು
ಗಾರರು ಆ ಗುರಾಣಿಗಳನ್ನು ಹೊರತರುವರು. ತರು
ವಾಯ ಅವುಗಳನ್ನು ಮೊದಲಿದ್ದ ಸ್ಥಳದಲ್ಲಿಯೇ
ಇಡುವರು.

[12]ರೆಹಬ್ಬಾಮನು ಯೆಹೋವನ ಮುಂದೆ ತನ್ನನ್ನು
ತಗ್ಗಿಸಿಕೊಂಡದ್ದರಿಂದ ಅವನ ಮೇಲಿದ್ದ ದೇವರ
ಕೋಪವು ಶಾಂತವಾಯಿತು. ಹೀಗೆ ಯೆಹೋವನು ಅವ
ನನ್ನು ಸಂಪೂರ್ಣವಾಗಿ ನಾಶಮಾಡಲಿಲ್ಲ. ಯಾಕೆಂದರೆ

ಯೆಹೂದದಲ್ಲಿ ಇನ್ನೂ ಕೆಲವು ನೀತಿವಂತರಿದ್ದರು.*
13ರಾಜನಾದ ರೆಹಬ್ಬಾಮನು ತನ್ನ ರಾಜ್ಯವನ್ನು ಸ್ಥಿರ
ಪಡಿಸಿಕೊಂಡು ಬಲಗೊಂಡನು. ಅವನು ಪಟ್ಟಕ್ಕೆ
ಬಂದಾಗ ನಲವತ್ತೊಂದು ವರುಷದವನಾಗಿದ್ದನು.
ಅವನು ಜೆರುಸಲೇಮಿನಲ್ಲಿ ಹದಿನೇಳು ವರುಷ ಆಳಿದನು.
ಯೆಹೋವನು ತಾನೇ ತನ್ನ ಹೆಸರನ್ನು ಸ್ಥಾಪಿಸು
ವದಕ್ಕೋಸ್ಕರ ಇಸ್ರೇಲಿನ ಎಲ್ಲ ಕುಲಗಳಲ್ಲಿ ಜೆರುಸ
ಲೇಮನ್ನು ಆರಿಸಿಕೊಂಡಿದ್ದನು. ರೆಹಬ್ಬಾಮನ ತಾಯಿಯ
ಹೆಸರು ನಯಮಾ. ಆಕೆ ಅಮ್ಮೋನ್ ದೇಶದವಳು.
14ರೆಹಬ್ಬಾಮನು ಯೆಹೋವನನ್ನು ಅನುಸರಿಸದೆ
ಅವಿಧೇಯನಾಗಿ ಕೆಟ್ಟಕಾರ್ಯಗಳನ್ನು ಮಾಡಿದನು.
15ಪ್ರವಾದಿಯಾದ ಶೆಮಾಯ ಮತು ದರ್ಶಿಯಾದ
ಇದ್ದೋ ಬರೆದ ಚರಿತ್ರೆಗಳ ವಂಶಾವಳಿಗಳಲ್ಲಿ ರೆಹಬ್ಬಾ
ಮನು ತಾನು ರಾಜನಾಗಿದ್ದಾಗ ತನ್ನ ಆಳ್ವಿಕೆಯ ಮೊದಲಿ
ನಿಂದ ಕಡೆಯವರೆಗೆ ಮಾಡಿದ ಎಲ್ಲಾ ವಿಷಯಗಳು
ಬರೆಯಲ್ಪಟ್ಟಿವೆ. ಅವನ ಆಳ್ವಿಕೆಯ ಕಾಲದಲ್ಲೆಲ್ಲಾ
ಅವನಿಗೂ ಯಾರೊಬ್ಬಾಮನಿಗೂ ಯುದ್ಧಗಳು ನಡೆಯು
ತ್ತಲೇ ಇದ್ದವು. 16ರೆಹಬ್ಬಾಮನು ತೀರಿಕೊಂಡಾಗ ಅವನ
ದೇಹವನ್ನು ದಾವೀದನಗರದಲ್ಲಿ ಹೂಳಿಟ್ಟರು. ಅವನ
ನಂತರ ಅವನ ಮಗನಾದ ಅಬೀಯನು ಹೊಸ ರಾಜನಾಗಿ
ಆಳಲು ಪ್ರಾರಂಭಿಸಿದನು.

## ಯೆಹೂದ ರಾಜ್ಯದ ರಾಜನಾದ ಅಬೀಯನು

13 ಇಸ್ರೇಲ್ ರಾಜ್ಯದ ರಾಜನಾದ ಯಾರೊಬ್ಬಾ
ಮನು ತನ್ನ ಆಳ್ವಿಕೆಯ ಹದಿನೆಂಟನೆಯ
ವರುಷದಲ್ಲಿ ಅಬೀಯನು ಯೆಹೂದದ ರಾಜನಾಗಿ
ಆಳತೊಡಗಿದನು. 2ಅವನು ಜೆರುಸಲೇಮಿನಲ್ಲಿ ಮೂರು
ವರುಷ ಆಳಿದನು. ಊರೀಯೇಲನ ಮಗಳಾದ ಮಾಕಳು
ಅಬೀಯನ ತಾಯಿ. ಊರೀಯೇಲನು ಗಿಬೆಯ ಊರಿ
ನವನು. ಅಬೀಯನಿಗೂ ಯಾರೊಬ್ಬಾಮನಿಗೂ ಯುದ್ಧ
ವಾಗುತ್ತಿತ್ತು. 3ಅಬೀಯನ ಬಳಿ ನಾಲ್ಕು ಲಕ್ಷ ಮಂದಿ ವೀರ
ಸೈನಿಕರಿದ್ದರು. ಅವನು ಸೈನ್ಯವನ್ನು ಯುದ್ಧದಲ್ಲಿ ಮುನ್ನ
ಡೆಸಿದನು. ಯಾರೊಬ್ಬಾಮನ ಬಳಿಯಲ್ಲಿ ಎಂಟು ಲಕ್ಷ
ಮಂದಿ ಸೈನಿಕರು ಇದ್ದರು. ಯಾರೊಬ್ಬಾಮನು ಅಬೀ
ಯನ ಮೇಲೆ ಯುದ್ಧಕ್ಕೆ ತಯಾರಾದನು.
4ಆಗ ಅಬೀಯನು ಎಫ್ರಾಯೀಮ್ ಬೆಟ್ಟ ಪ್ರಾಂತ್ಯದ
ಚೆಮಾರ್ಯೆ ಬೆಟ್ಟದ ಮೇಲೆ ನಿಂತು, “ಯಾರೊಬ್ಬಾಮನೇ,
ಸಮಸ್ತ ಇಸ್ರೇಲರೇ, ನನ್ನ ಮಾತುಗಳಿಗೆ ಕಿವಿಗೊಡಿರಿ.
5ಇಸ್ರೇಲರ ದೇವರಾದ ಯೆಹೋವನು ದಾವೀದನಿಗೂ
ಅವನ ಗಂಡುಮಕ್ಕಳಿಗೂ ನಿರಂತರವಾಗಿ ಇಸ್ರೇಲನ್ನು
ಆಳಲು ಉಪ್ಪಿನ ಒಡಂಬಡಿಕೆಯ ಮೂಲಕ ಅಧಿಕಾರ
ಕೊಟ್ಟಿದ್ದಾನೆಂದು ನಿಮಗೆ ತಿಳಿದಿರಬೇಕು. 6ಆದರೆ
ಯಾರೊಬ್ಬಾಮನು ತನ್ನ ಒಡೆಯನಿಗೆ ವಿರುದ್ಧವಾಗಿ
ದಂಗೆ ಎದ್ದನು. ನೆಬಾಟನ ಮಗನಾದ ಯಾರೊಬ್ಬಾಮನು
ಸೊಲೊಮೋನನ ಸೇವಕರಲ್ಲಿ ಒಬ್ಬನಾಗಿದ್ದನು. ಆಗ
ಕೆಲಸಕ್ಕೆ ಬಾರದ ದುಷ್ಟಜನರು ಯಾರೊಬ್ಬಾಮನ ಸ್ನೇಹಿತ
ರಾಗಿ ಅವನನ್ನು ಹಿಂಬಾಲಿಸಿ ರೆಹಬ್ಬಾಮನಿಗೆ ವಿರುದ್ಧ
ವಾಗಿ ದಂಗೆ ಎದ್ದರು. ಸೊಲೊಮೋನನ ಮಗನಾದ
ರೆಹಬ್ಬಾಮನು ಆಗ ಸಣ್ಣ ಪ್ರಾಯದವನಾಗಿ ಅನುಭವ
ವಿಲ್ಲದವನಾಗಿದ್ದನು. ಆದುದರಿಂದ ಯಾರೊಬ್ಬಾಮ
ನನ್ನೂ ಅವನ ದುಷ್ಟ ಹಿಂಬಾಲಕರನ್ನೂ ತಡೆಯಲು
ಅವನಿಗೆ ಆಗಲಿಲ್ಲ.
8“ದಾವೀದನ ಮಕ್ಕಳು ಆಳುತ್ತಿರುವ ಯೆಹೋವನ
ರಾಜ್ಯವನ್ನು ಸೋಲಿಸಲು ಈಗ ನೀವು ನಿರ್ಧರಿಸಿದ್ದೀರಿ.
ನಿಮ್ಮಲ್ಲಿ ಅಧಿಕ ಸಂಖ್ಯೆಯ ಸೈನ್ಯವಿರಬಹುದು. ಯಾರೊ
ಬ್ಬಾಮನು ನಿಮ್ಮ ದೇವರುಗಳಾಗಿ ಮಾಡಿಸಿದ ಬಂಗಾರದ
ಬಸವ ನಿಮ್ಮಲ್ಲಿವೆ. 9ನೀವು ಆರೋನನ ಸಂತತಿಯವರಾದ
ಯೆಹೋವನ ಯಾಜಕರನ್ನು ಹೊರಡಿಸಿಬಿಟ್ಟಿರಿ. ನೀವು
ಲೇವಿಯರನ್ನೂ ಹೊರಡಿಸಿಬಿಟ್ಟಿರಿ. ಅನ್ಯಜನಾಂಗದವ
ರಂತೆ ನೀವು ನಿಮ್ಮಲ್ಲಿಂದಲೇ ಯಾಜಕರನ್ನು ಆರಿಸಿ
ಕೊಂಡಿರಿ. ಯಾವನಾದರೂ ಏಳು ಟಗರುಗಳನ್ನೂ
ಒಂದು ಎಳೇ ಹೋರಿಯನ್ನೂ ತಂದರೆ ನೀವು ಅವನನ್ನು
‘ದೇವರಲ್ಲದವುಗಳ’ ಸೇವೆಮಾಡಲು ಯಾಜಕನನ್ನಾಗಿ
ಮಾಡುವಿರಿ.
10“ನಮಗಾದರೋ ಯೆಹೋವನೇ ದೇವರು.
ಯೆಹೂದ್ಯ ಪ್ರಾಂತ್ಯದವರಾದ ನಾವು ದೇವರ ಕಟ್ಟಳೆಗೆ
ವಿಧೇಯರಾಗಲು ನಿರಾಕರಿಸಲಿಲ್ಲ. ನಾವು ಆತನನ್ನು
ತೊರೆಯಲಿಲ್ಲ. ಆತನ ಸೇವೆಮಾಡಲು ಲೇವಿಯರು
ಆರೋನನ ಸಂತತಿಯವರಾದ ಯಾಜಕರಾಗಿ ಸಹಾಯ
ಮಾಡುವರು. 11ಅವರು ಪ್ರತಿದಿನವೂ ಮುಂಜಾನೆ
ಸಾಯಂಕಾಲಗಳಲ್ಲಿ ಸರ್ವಾಂಗಹೋಮಗಳನ್ನೂ ಧೂಪ
ಗಳನ್ನೂ ಅರ್ಪಿಸುವರು; ಮೇಜಿನ ಮೇಲೆ ನೈವೇದ್ಯದ
ರೊಟ್ಟಿಗಳನ್ನಿಡುವರು. ಅವರು ಬಂಗಾರದ ದೀಪ
ಸ್ತಂಭಗಳ ಮೇಲಿನ ಆರತಿಗಳನ್ನು ಸರಿಯಾಗಿ ನೋಡಿ
ಕೊಳ್ಳುವುದರಿಂದ ಅವು ಹಗಲಿನಲ್ಲಿಯೂ ಸಾಯಂ
ಕಾಲದಲ್ಲಿಯೂ ಪ್ರಕಾಶಮಾನವಾಗಿ ಉರಿಯುವವು.
ನಾವು ಬಹಳ ಎಚ್ಚರಿಕೆಯಿಂದ ನಮ್ಮ ದೇವರ ಸೇವೆ
ಮಾಡುತ್ತೇವೆ. ಆದರೆ ನೀವು ಆತನನ್ನು ತೊರೆದು
ಬಿಟ್ಟಿದ್ದೀರಿ. 12ದೇವರು ನಮ್ಮೊಂದಿಗಿದ್ದಾನೆ. ನಮ್ಮನ್ನು
ಆಳುವವನು ಆತನೇ. ಅವನ ಯಾಜಕರು ನಮ್ಮೊಂದಿ
ಗಿದ್ದಾರೆ. ದೇವರ ಯಾಜಕರು ತುತ್ತೂರಿಯನ್ನೂದಿ
ನಿಮ್ಮನ್ನು ಆತನ ಬಳಿಗೆ ಬರಲು ಎಚ್ಚರಿಸುತ್ತಾರೆ. ಇಸ್ರೇ
ಲರೇ, ನಿಮ್ಮ ಪೂರ್ವಿಕರ ದೇವರಾದ ಯೆಹೋವನ

**ನೀತಿವಂತರು** ಬಹುಶಃ ರೆಹಬ್ಬಾಮನಂತೆ ಪಶ್ಚಾತ್ತಾಪಪಟ್ಟ ಇತರರನ್ನು ಇದು ಸೂಚಿಸುತ್ತಿರಬಹುದು. ದೇವರು ಅವರನ್ನು ಉಳಿಸಿಕಾಪಾಡಿದನು.

ಜನರೊಂದಿಗೆ ಕಾದಾಡಬೇಡಿರಿ. ನೀವು ಜಯ
ಹೊಂದುವದಿಲ್ಲ.''
13ಆದರೆ ಯಾರೊಬ್ಬಾಮನು ತನ್ನ ಸೈನ್ಯದ ಒಂದು
ಭಾಗವನ್ನು ಅಬೀಯನ ಸೈನ್ಯದ ಹಿಂಭಾಗಕ್ಕೆ ಅವನಿಗೆ
ಗೊತ್ತಿಲ್ಲದಂತೆ ಕಳುಹಿಸಿದನು. ಯಾರೊಬ್ಬಾಮನ ಸೈನ್ಯವು
ಅಬೀಯನ ಸೈನ್ಯಕ್ಕೆ ಎದುರಾಗಿತ್ತು. ಅಬೀಯನ ಹಿಂದೆ
ಯಾರೊಬ್ಬಾಮನ ಸೈನ್ಯವು ಅಡಗಿಕೊಂಡಿತ್ತು. 14ಅಬೀ
ಯನ ಸೈನ್ಯವು ಸುತ್ತಲೂ ನೋಡಿದಾಗ ವೈರಿಗಳ ಸೈನ್ಯವು
ಮುಂದೆಯೂ ಹಿಂದೆಯೂ ಯುದ್ಧಮಾಡುತ್ತಿರುವದನ್ನು
ನೋಡಿ ಯೆಹೋವನನ್ನು ಕೂಗಿದರು. ಯಾಜಕರು
ತುತ್ತೂರಿಯನ್ನೂದಿದರು. 15ಆಗ ಅಬೀಯನ ಸೈನ್ಯದ
ವರು ದೊಡ್ಡ ಆರ್ಭಟ ಮಾಡಿದರು. ಆರ್ಭಟಿಸುತ್ತಾ
ಮುಂದೆ ಸಾಗಿದರು ಯಾರೊಬ್ಬಾಮನ ಸೈನ್ಯವನ್ನು ಮತ್ತು
ಎಲ್ಲಾ ಇಸ್ರೇಲರನ್ನು ಯೆಹೂದದ ಅಬೀಯನ ಸೈನ್ಯವು
ಸೋಲಿಸುವಂತೆ ದೇವರು ಮಾಡಿದನು. 16ಯೆಹೂದದ
ಸೈನ್ಯದ ಮುಂದೆ ಇಸ್ರೇಲರ ಸೈನ್ಯವು ಬೆನ್ನುಕೊಟ್ಟು ಓಡಿ
ಹೋಗುವಂತೆ ದೇವರು ಮಾಡಿದನು. 17ಅಬೀಯನ
ಸೈನ್ಯವು ಇಸ್ರೇಲಿನ ಸೈನ್ಯದ ಮೇಲೆ ಮಹಾಜಯವನ್ನು
ಗಳಿಸಿತು. ಯಾರೊಬ್ಬಾಮನ ಐದು ಲಕ್ಷ ಪಳಗಿದ
ಸೈನಿಕರು ಕೊಲ್ಲಲ್ಪಟ್ಟರು. 18ಇಸ್ರೇಲಿನ ಜನರು ಸೋತು
ಹೋದರು. ಯೆಹೂದದ ಜನರಿಗೆ ಜಯ ದೊರಕಿತು.
ಯಾಕಂದರೆ ಅವರು ತಮ್ಮ ಪೂರ್ವಿಕರ ದೇವರಾದ
ಯೆಹೋವನ ಮೇಲೆ ಭರವಸವನ್ನಿಟ್ಟಿದರು.

19ಅಬೀಯನ ಸೈನಿಕರು ಯಾರೊಬ್ಬಾಮನ ಸೈನಿಕರನ್ನು
ಓಡಿಸಿದರು. ಮತ್ತು ಅವರ ಪಟ್ಟಣಗಳಾದ ಬೇತೇಲ್,
ಯೆಷಾನಾ ಮತ್ತು ಎಫ್ರೋನ್‌ಗಳನ್ನು ವಶಪಡಿಸಿ
ಕೊಂಡರು. ಈ ಪಟ್ಟಣಗಳನ್ನೂ ಅವುಗಳ ಸುತ್ತಮುತ್ತ
ಲಿದ್ದ ಹಳ್ಳಿಗಳನ್ನೂ ವಶಪಡಿಸಿಕೊಂಡರು.

20ಅಬೀಯನಿರುವಷ್ಟು ಕಾಲ ಯಾರೊಬ್ಬಾಮನು
ಮತ್ತೆ ಬಲಗೊಳ್ಳಲೇ ಇಲ್ಲ. ಯೆಹೋವನು ಯಾರೊಬ್ಬಾ
ಮನನ್ನು ಸಾಯಿಸಿದನು.

21ಅಬೀಯನು ಬಲಗೊಂಡನು. ಅವನು ಹದಿನಾಲ್ಕು
ಮಂದಿ ಸ್ತ್ರೀಯರನ್ನು ಮದುವೆ ಮಾಡಿಕೊಂಡು ಅವರಿಂದ
ಇಪ್ಪತ್ತೆರಡು ಗಂಡು ಮಕ್ಕಳನ್ನೂ ಹದಿನಾರು ಹೆಣ್ಣು
ಮಕ್ಕಳನ್ನೂ ಪಡೆದನು. 22ಅಬೀಯನು ಮಾಡಿದ ಎಲ್ಲಾ
ಕಾರ್ಯಗಳ ಕುರಿತ ಪ್ರವಾದಿ ಇದ್ದೋ ಬರೆದ ಪುಸ್ತಕದಲ್ಲಿ
ದಾಖಲಾಗಿವೆ.

14 ಅಬೀಯನು ತನ್ನ ಪೂರ್ವಿಕರೊಂದಿಗೆ ವಿಶ್ರಾಂ
ತಿಗೆ ಸೇರಿದನು. ಜನರು ಅವನನ್ನು ದಾವೀದ
ನಗರದಲ್ಲಿ ಸಮಾಧಿಮಾಡಿದರು. ಅಬೀಯನ ನಂತರ
ಅವನ ಮಗನಾದ ಆಸನು ಪಟ್ಟಕ್ಕೆ ಬಂದನು. ಆಸನ
ಆಳ್ವಿಕೆಯ ಹತ್ತು ವರ್ಷ ದೇಶದಲ್ಲಿ ಸಮಾಧಾನ ನೆಲೆಸಿತ್ತು.

## ಯೆಹೂದದ ಅರಸನಾದ ಆಸ

2ಆಸನು ತನ್ನ ದೇವರಾದ ಯೆಹೋವನ ದೃಷ್ಟಿಯಲ್ಲಿ
ಒಳ್ಳೆಯವನಾಗಿಯೂ ನೀತವಂತನಾಗಿಯೂ ಇದ್ದನು.
3ಮೂರ್ತಿಪೂಜೆಗಾಗಿ ಮಾಡಿದ ಯಜ್ಞವೇದಿಕೆಗಳನ್ನು
ತೆಗೆದುಹಾಕಿಸಿದನು. ವಿಗ್ರಹಾರಾಧಕರ ಪೂಜಾಸ್ಥಳ
ಗಳನ್ನು, ಸ್ಮಾರಕಕಲ್ಲುಗಳನ್ನು ಒಡೆದು ಹಾಳುಮಾಡಿಸಿ
ದನು. ಅಶೇರಸ್ತಂಭಗಳನ್ನು ತುಂಡುಮಾಡಿಸಿದನು.
4''ನಿಮ್ಮ ಪೂರ್ವಿಕರ ದೇವರಾದ ಯೆಹೋವನನ್ನೇ
ಅನುಸರಿಸಿ ಆತನ ಆಜ್ಞೆಗಳಿಗೂ ಕಟ್ಟಳೆಗಳಿಗೂ ವಿಧೇಯ
ರಾಗಿರಿ'' ಎಂದು ಆಸನು ಆಜ್ಞಾಪಿಸಿದನು. 5ಯೆಹೂದ
ದೇಶದ ಪಟ್ಟಣಗಳಲ್ಲಿದ್ದ ಎಲ್ಲಾ ವಿಗ್ರಹಗಳನ್ನೂ ಪೂಜಾ
ಸ್ಥಳಗಳನ್ನೂ ಕಿತ್ತುಹಾಕಿಸಿದನು. ಆತನ ಆಳ್ವಿಕೆಯಲ್ಲಿ
ರಾಜ್ಯದಲ್ಲೆಲ್ಲಾ ಶಾಂತಿ ನೆಲೆಸಿತ್ತು. 6ಆ ಕಾಲದಲ್ಲಿ ಆಸನು
ಯೆಹೂದ ಪ್ರಾಂತ್ಯದಲ್ಲಿ ಕೋಟೆಕೊತ್ತಲಗಳುಳ್ಳ ಪಟ್ಟಣ
ಗಳನ್ನು ಕಟ್ಟಿಸಿದನು. ಆಸನ ಆಳ್ವಿಕೆಯಲ್ಲಿ ಯುದ್ಧವೇ
ಇರಲಿಲ್ಲ. ಯಾಕಂದರೆ ಯೆಹೋವನು ಅವನಿಗೆ
ಸಮಾಧಾನವನ್ನು ಅನುಗ್ರಹಿಸಿದ್ದನು.

7ಆಸನು ಜನರಿಗೆ , ''ನಾವು ಈ ಪಟ್ಟಣಗಳ ಸುತ್ತಲೂ
ಕೋಟೆಯನ್ನು ಕಟ್ಟೋಣ; ಬುರುಜುಗಳನ್ನೂ ಕದ
ಗಳನ್ನೂ ಭದ್ರಪಡಿಸೋಣ. ನಾವು ನಮ್ಮ ದೇವರಾದ
ಯೆಹೋವನನ್ನು ಅನುಸರಿಸುವದರಿಂದ ಈ ದೇಶವು
ನಮ್ಮದಾಗಿರುತ್ತದೆ. ಆದುದರಿಂದ ನಾವು ಹೀಗೆ
ಮಾಡೋಣ. ಆತನು ನಮ್ಮ ಸುತ್ತಲೂ ಸಮಾಧಾನವನ್ನು
ಅನುಗ್ರಹಿಸಿದ್ದಾನೆ'' ಎಂದು ಹೇಳಿದನು. ಅಂತೆಯೇ
ಅವರು ಕಟ್ಟಿ ಪೂರೈಸಿದರು.

8ಆಸನ ಬಳಿ ಮೂರು ಲಕ್ಷ ಭೂಸೈನಿಕರಿದ್ದರು,
ಯೆಹೂದಕುಲದ ಇವರು ಗುರಾಣಿಗಳನ್ನೂ ಬರ್ಜಿ
ಗಳನ್ನೂ ಬಳಸಬಲ್ಲವರಾಗಿದ್ದರು. ಇವರಲ್ಲದೆ ಬೆನ್ಯಾ
ಮೀನ್ ಕುಲದಿಂದ ಎರಡು ಲಕ್ಷದ ಎಂಭತ್ತು ಸಾವಿರ
ಮಂದಿ ಸೈನಿಕರಿದ್ದರು. ಇವರು ಸಣ್ಣ ಗುರಾಣಿಗಳನ್ನೂ
ಬಿಲ್ಲುಬಾಣಗಳನ್ನೂ ಬಳಸಬಲ್ಲವರಾಗಿದ್ದರು. ಇವರೆ
ಲ್ಲರೂ ರಣವೀರರಾಗಿದ್ದರು.

9ಇಥಿಯೋಪಿಯಾ ದೇಶದ ಜೆರಹನು ಆಸನ ಮೇಲೆ
ಯುದ್ಧಮಾಡಲು ಬಂದನು. ಅವನೊಡನೆ ಹತ್ತು ಲಕ್ಷ
ಸೈನಿಕರಿದ್ದರು; ಮೂನ್ನೂರು ರಥಗಳಿದ್ದವು. ಅವನ ಸೈನ್ಯವು
ಮಾರೇಷದ ತನಕ ಬಂದಿತ್ತು. 10ಆಸನು ಜೆರಹನ ವಿರುದ್ಧ
ಯುದ್ಧಮಾಡಲು ಹೊರಟನು. ಮಾರೇಷದ ಚೆಫಾತ
ಎಂಬ ಕಣಿವೆಯಲ್ಲಿ ವ್ಯೂಹ ಕಟ್ಟಿದರು.

11ಆಸನು ದೇವರಾದ ಯೆಹೋವನನ್ನು ಪ್ರಾರ್ಥಿಸಿ
''ಯೆಹೋವನೇ, ಬಲಹೀನರಾದವರು ಬಲಿಷ್ಠರಾದವ
ರನ್ನು ಸೋಲಿಸಲು ನೀನೇ ಸಹಾಯಿಸಬೇಕು. ದೇವರಾದ
ಯೆಹೋವನೇ, ನಮಗೆ ಸಹಾಯ ಮಾಡು. ನೀನೇ ನಮ್ಮ
ರಕ್ಷಕನು. ನಾವು ನಿನ್ನ ಮೇಲೆ ಭರವಸವಿಟ್ಟಿರುತ್ತೇವೆ. ನಿನ್ನ

ಹೆಸರಿನಲ್ಲಿ ನಾವು ದೊಡ್ಡ ಸೈನ್ಯದೊಂದಿಗೆ ಯುದ್ಧಕ್ಕೆ ಹೊರಟಿರುತ್ತೇವೆ. ಯೆಹೋವನೇ, ನೀನೇ ನಮ್ಮ ದೇವರು. ನಿನ್ನನ್ನು ಸೋಲಿಸಲು ಯಾರಿಗೂ ಅವಕಾಶ ಕೊಡಬೇಡ'' ಎಂದು ಬೇಡಿಕೊಂಡನು.

[12]ಆಗ ಯೆಹೂದ ದೇಶದ ಆಸನ ಸೈನ್ಯವು ಇಥಿಯೋ
ಪಿಯಾದ ಸೈನ್ಯವನ್ನು ಸೋಲಿಸುವಂತೆ ಯೆಹೋವನು
ಮಾಡಿದನು. [13]ಆಸನ ಸೈನಿಕರು ಇಥಿಯೋಪಿಯಾದ
ಸೈನ್ಯವನ್ನು ಗೆರಾರಿನ ತನಕ ಹಿಂದಟ್ಟಿಕೊಂಡು ಹೋದರು.
ಅವರು ಮತ್ತೆ ಸೈನ್ಯವನ್ನು ಕಟ್ಟಿ ಯುದ್ಧ ಮಾಡಲು
ಸಾಧ್ಯವಾಗದಷ್ಟು ಸೈನಿಕರು ಸತ್ತರು. ಅವರ ಬಲವನ್ನು
ಮುರಿಯಲು ಯೆಹೋವನು ತನ್ನ ಸೈನ್ಯವನ್ನು ಬಳಸಿ
ಕೊಂಡನು. [14]ಆಸನು ತನ್ನ ಸೈನ್ಯದೊಡನೆ ಗೆರಾರಿನ ಎಲ್ಲಾ
ಪಟ್ಟಣಗಳನ್ನು ಸೋಲಿಸಿಬಿಟ್ಟನು. ಅವುಗಳಲ್ಲಿ ವಾಸಿಸುವ
ಜನರು ಯೆಹೋವನಿಗೆ ಭಯಪಟ್ಟರು. ಆ ಪಟ್ಟಣಗಳಲ್ಲಿ
ಇದ್ದ ನಿಕ್ಷೇಪಗಳನ್ನು ಆಸನ ಸೈನಿಕರು ದೋಚಿದರು.
[15]ಆಸನ ಸೈನಿಕರು ಕುರುಬರ ಪಾಳೆಯವನ್ನು ಧ್ವಂಸ ಮಾಡಿ
ಅನೇಕಾನೇಕ ಕುರಿಗಳನ್ನೂ ಒಂಟೆಗಳನ್ನೂ ಸೂರೆಮಾಡಿ
ಜೆರುಸಲೇಮಿಗೆ ತಂದರು.

### ಆಸನ ಪರಿವರ್ತನೆ

15 ಓಬೇದನ ಮಗನಾದ ಅಜರ್ಯನ ಮೇಲೆ ದೇವ
ರಾತ್ಮವು ಬಂದಿತು. ಅಜರ್ಯನು ಆಸನನ್ನು
ಸಂಧಿಸಿ ಹೀಗೆ ಹೇಳಿದನು: ''ಆಸನೇ, ನನ್ನ ಮಾತನ್ನು
ಕೇಳು. ಯೆಹೂದದ ಜನರೇ, ಬೆನ್ಯಾಮೀನ್ ಜನರೇ,
ನನ್ನ ಮಾತನ್ನು ಕೇಳಿರಿ. ನೀವು ಯೆಹೋವನೊಡನೆ
ಇದ್ದರೆ ಆತನು ನಿಮ್ಮ ಸಂಗಡ ಇರುವನು. ನೀವು ಆತನನ್ನು
ಹುಡುಕಿದರೆ ಆತನು ನಿಮಗೆ ಸಿಕ್ಕುವನು. ಆದರೆ ನೀವು
ಆತನನ್ನು ತೊರೆದರೆ ಆತನು ನಿಮ್ಮನ್ನೂ ತೊರೆಯುವನು.
[3]ಬಹಳಕಾಲದ ತನಕ ಇಸ್ರೇಲರಲ್ಲಿ ನಿಜವಾದ ದೇವರಿರ
ಲಿಲ್ಲ; ಬೋಧಕನಿರಲಿಲ್ಲ; ಧರ್ಮಶಾಸ್ತ್ರವೂ ಇರಲಿಲ್ಲ.
[4]ಆದರೆ ಇಸ್ರೇಲರು ತಮಗೆ ಕಷ್ಟಬಂದಾಗ ದೇವರ ಕಡೆಗೆ
ತಿರುಗಿದರು. ಆತನೇ ಇಸ್ರೇಲಿನ ದೇವರು. ಅವರು
ಆತನನ್ನು ಹುಡುಕಿದಾಗ ಆತನು ಅವರಿಗೆ ಸಿಕ್ಕಿದನು. [5]ಆ
ಕಷ್ಟದ ಸಮಯದಲ್ಲಿ ಯಾರೂ ಸುರಕ್ಷಿತವಾಗಿ ಪ್ರಯಾಣ
ಮಾಡುವಂತಿರಲಿಲ್ಲ. ಎಲ್ಲಾ ದೇಶಗಳಲ್ಲಿಯೂ ಕಷ್ಟ
ತೊಂದರೆಗಳು ತುಂಬಿದ್ದವು. [6]ಒಂದು ದೇಶವು
ಇನ್ನೊಂದು ದೇಶವನ್ನು ನಾಶಮಾಡುತ್ತಿತ್ತು; ಒಂದು
ಪಟ್ಟಣವು ಇನ್ನೊಂದು ಪಟ್ಟಣವನ್ನು ಸೂರೆಮಾಡುತ್ತಿತ್ತು.
ಹೀಗೆ ದೇವರು ಎಲ್ಲ ಬಗೆಯ ತೊಂದರೆಗಳಿಂದ ಅವರನ್ನು
ತಳಮಳಗೊಳಿಸಿದನು. [7]ಯೆಹೂದದ ಜನರೇ, ಬೆನ್ಯಾ
ಮೀನ್ ಜನರೇ ನೀವು ಶಕ್ತರಾಗಿರಿ, ನಿರಾಶರಾಗ
ಬೇಡಿರಿ; ಯಾಕಂದರೆ ನಿಮ್ಮ ಒಳ್ಳೆಯ ಕೆಲಸಕ್ಕೆ ನಿಮಗೆ
ಪ್ರತಿಫಲ ದೊರೆಯುವುದು.''

[8]ಪ್ರವಾದಿಯಾದ ಓಬೇದನು ತಂದ ಸಂದೇಶವನ್ನು
ಆಸನು ಕೇಳಿ ತುಂಬಾ ಪ್ರೋತ್ಸಾಹಗೊಂಡನು. ಅನಂತರ
ಯೆಹೂದ ಮತ್ತು ಬೆನ್ಯಾಮೀನ್ ಪ್ರಾಂತ್ಯದಲ್ಲಿದ್ದ ಎಲ್ಲಾ
ವಿಗ್ರಹಗಳನ್ನು ತೆಗೆದುಹಾಕಿಸಿದನು. ಗೆದ್ದಿದ್ದ ಎಫ್ರಾ
ಯೀಮ್ ಬೆಟ್ಟಪ್ರದೇಶಗಳಲ್ಲಿದ್ದ ವಿಗ್ರಹಗಳನ್ನು ತೆಗೆದು
ಹಾಕಿಸಿದನು. ದೇವಾಲಯದ ಮಂಟಪದೆದುರು ಇದ್ದ
ಯೆಹೋವನ ಯಜ್ಞವೇದಿಕೆಯನ್ನು ಸರಿಪಡಿಸಿದನು.

[9]ಆಮೇಲೆ ಆಸನು ಯೆಹೂದ ಮತ್ತು ಬೆನ್ಯಾಮೀನ್
ಪ್ರಾಂತ್ಯದ ಜನರನ್ನೆಲ್ಲಾ ಒಟ್ಟಾಗಿ ಸೇರಿಸಿದನು. ಅದೇ
ಪ್ರಕಾರ ಅವನು ಇಸ್ರೇಲನ್ನು ಬಿಟ್ಟು ಯೆಹೂದದಲ್ಲಿ
ನೆಲೆಸಲು ಬಂದಿದ್ದ ಎಫ್ರಾಯೀಮ್, ಮನಸ್ಸೆ ಮತ್ತು
ಸಿಮೆಯೋನ್ ಪ್ರಾಂತ್ಯಗಳವರನ್ನೂ ಒಟ್ಟಾಗಿ ಸೇರಿಸಿ
ದನು. ದೇವರಾದ ಯೆಹೋವನು ಆಸನ ಕೂಡ ಇರು
ವದನ್ನು ನೋಡಿ ಅವನೊಂದಿಗೆ ಸೇರಲು ಅನೇಕ ಜನರು
ಬಂದಿದ್ದರು.

[10]ಅವರೆಲ್ಲರೂ ಆಸನ ಆಳ್ವಿಕೆಯ ಹದಿನೈದನೆಯ
ವರುಷದ ಮೂರನೆಯ ತಿಂಗಳಲ್ಲಿ ಜೆರುಸಲೇಮಿನಲ್ಲಿ
ಸೇರಿಬಂದರು. [11]ಆ ಸಮಯದಲ್ಲಿ ಅವರು ಏಳುನೂರು
ಹೋರಿಗಳನ್ನೂ ಏಳು ಸಾವಿರ ಆಡುಕುರಿಗಳನ್ನೂ,
ಯೆಹೋವನಿಗೆ ಸಮರ್ಪಿಸಿದರು. ಇವುಗಳನ್ನು ಆಸನ
ಸೈನ್ಯವು ಶತ್ರುಗಳಿಂದ ಸುಲಿದುಕೊಂಡಿದ್ದರು. [12]ತಮ್ಮ
ಪೂರ್ವಿಕರು ಸೇವೆ ಮಾಡಿದ ದೇವರೊಂದಿಗೆ ಅಲ್ಲಿ
ಅವರು ಒಡಂಬಡಿಕೆ ಮಾಡಿಕೊಂಡು ತಾವು ಪೂರ್ಣ
ಹೃದಯದಿಂದಲೂ ಪೂರ್ಣಆತ್ಮದಿಂದಲೂ ಆತನ
ಸೇವೆಮಾಡುವುದಾಗಿ ಪ್ರಮಾಣಮಾಡಿದರು.

[13]ಯಾವನಾದರೂ ದೇವರಾದ ಯೆಹೋವನ ಸೇವೆ
ಮಾಡಲು ನಿರಾಕರಿಸುವದಾದರೆ ಆ ವ್ಯಕ್ತಿಯು ಗಂಡಸಾ
ಗಿದ್ದರೂ ಹೆಂಗಸಾಗಿದ್ದರೂ ಮುಖ್ಯವಾದವನಾಗಿದ್ದರೂ
ಮುಖ್ಯವಲ್ಲದವನಾಗಿದ್ದರೂ ಕೊಲ್ಲಲ್ಪಡಬೇಕು ಎಂಬ
ದಾಗಿ ಹೇಳಿದರು. [14]ಆಮೇಲೆ ಆಸನೂ ಅವನ ಜನರೂ
ದೇವರಿಗೆ ಪ್ರಮಾಣಮಾಡಿ ಸಂತೋಷದಿಂದ ಹರ್ಷಧ್ವನಿ
ಮಾಡಿದರು. ಅಲ್ಲದೆ ತುತ್ತೂರಿಯನ್ನೂ ಕೊಂಬನ್ನೂ
ಊದಿದರು. [15]ಯೆಹೂದದ ಎಲ್ಲಾ ಜನರು ತಾವು
ಯೆಹೋವನಿಗೆ ಮಾಡಿದ ಪ್ರಮಾಣದ ನಿಮಿತ್ತ ಸಂತೋಷ
ಪಟ್ಟರು. ಯಾಕಂದರೆ ಅವರು ತಮ್ಮ ಪೂರ್ಣ
ಹೃದಯದಿಂದ ಪ್ರಮಾಣಮಾಡಿದ್ದರು. ಅವರು ಯೆಹೋ
ವನನ್ನು ಪೂರ್ಣಮನಸ್ಸಿನಿಂದ ಹಿಂಬಾಲಿಸಿದರು. ಅವರು
ಆತನನ್ನು ಹುಡುಕಿದಾಗ ಆತನು ಅವರಿಗೆ ಪ್ರಸನ್ನನಾಗಿ
ಅವರಿಗೆ ಸಮಾಧಾನವನ್ನು ಕೊಟ್ಟನು.

[16]ಆಸನು ತನ್ನ ತಾಯಿಯಾದ ಮಾಕಳನ್ನು ರಾಜನ
ತಾಯಿಯೆಂಬ ಪದವಿಯಿಂದ ತಳ್ಳಿಬಿಟ್ಟನು. ಯಾಕಂದರೆ
ಆಕೆಯು ಅಶೇರ್ ದೇವತೆಯ ಅಸಹ್ಯವಾದ ಕಂಬವನ್ನು
ಮಾಡಿಸಿದ್ದಳು. ಆಸನು ಅದನ್ನು ಕಡಿದು ಚೂರುಚೂರಾಗಿ

ಮಾಡಿಸಿದನು. ನಂತರ ಅದನ್ನು ಕಿದ್ರೋನ್ ಕಣಿವೆಯಲ್ಲಿ ಸುಟ್ಟುಬಿಟ್ಟನು.17 ಆದರೂ ಯೆಹೂದದ ಎಲ್ಲಾ ಉನ್ನತ ಸ್ಥಳಗಳು ತೆಗೆಯಲ್ಪಡಲಿಲ್ಲ, ಆದರೆ ಆಸನು ತನ್ನ ಜೀವ ಮಾನದಲೆಲ್ಲಾ ಯೆಹೋವನಿಗೆ ನಂಬಿಗಸ್ತನಾಗಿದ್ದನು.

18 ಆಸನು ತನ್ನ ತಂದೆಯು ಕೊಟ್ಟ ಪರಿಶುದ್ಧ ಕಾಣಿಕೆಗಳನ್ನು ದೇವಾಲಯದಲ್ಲಿ ಇಡಿಸಿದನು. ಅವು ಬೆಳ್ಳಿ ಬಂಗಾರಗಳ ವಸ್ತುಗಳಾಗಿದ್ದವು. 10 ಆಸನ ಆಳ್ವಿಕೆಯ ಮೂವತ್ತೈದನೆಯ ವರುಷದ ತನಕ ದೇಶದಲ್ಲಿ ಯುದ್ಧವೇ ಇರಲಿಲ್ಲ.

## ಆಸನ ಕೊನೆಯ ವರ್ಷಗಳು

16 ಆಸನ ಆಳ್ವಿಕೆಯ ಮೂವತ್ತಾರನೆಯ ವರುಷದಲ್ಲಿ ಇಸ್ರೇಲಿನ ರಾಜನಾದ ಬಾಷನು ಆಸನ ಸಂಗಡ ಯುದ್ಧಕ್ಕೆ ಹೊರಟನು. ಅವನು ರಾಮ ಎಂಬ ಪಟ್ಟಣವನ್ನು ಕೋಟೆಯನ್ನಾಗಿ ಪರಿವರ್ತಿಸಿ, ಯೆಹೂದದ ರಾಜನಾದ ಆಸನ ಬಳಿಗೆ ಹೋಗುವುದಕ್ಕಾಗಲೀ ಬರುವುದಕ್ಕಾಗಲೀ ಯಾರಿಗೂ ಆಗದಂತೆ ಮಾಡಿದನು.

2 ಆಗ ಆಸನು ದೇವಾಲಯದಲ್ಲಿಯೂ ಅರಮನೆಯಲ್ಲಿಯೂ ಶೇಖರಿಸಿಟ್ಟಿದ್ದ ಬೆಳ್ಳಿಬಂಗಾರಗಳನ್ನೆಲ್ಲಾ ಒಟ್ಟಾಗಿ ಸೇರಿಸಿ ದಮಸ್ಕದಲ್ಲಿದ್ದ ಅರಾಮ್ಯರ ಅರಸನಾದ ಬೆನ್ಹದದನಿಗೆ ಈ ಸಂದೇಶದೊಡನೆ ಕಳುಹಿಸಿದನು, 3 ‘‘ಬೆನ್ಹದದನೇ, ನಮ್ಮೊಂದಿಗೆ ಒಂದು ಒಪ್ಪಂದವಿರಲಿ. ನನ್ನ ತಂದೆಯೂ ನಿನ್ನ ತಂದೆಯೂ ಮಾಡಿದ್ದ ಒಪ್ಪಂದವನ್ನು ನಾವು ಮುಂದುವರಿಸೋಣ. ನೋಡು, ನಾನೀಗ ನಿನಗೆ ಬೆಳ್ಳಿಬಂಗಾರಗಳನ್ನು ಕಳುಹಿಸುತ್ತಿದ್ದೇನೆ. ನೀನೀಗ ಇಸ್ರೇಲಿನ ರಾಜನಾದ ಬಾಷನೊಡನೆ ಮಾಡಿದ್ದ ಒಪ್ಪಂದವನ್ನು ಮುರಿದುಹಾಕು. ಆಗ ಅವನು ನನಗೆ ತೊಂದರೆ ಕೊಡುವದನ್ನು ನಿಲ್ಲಿಸುವನು.’’

4 ಇದಕ್ಕೆ ಬೆನ್ಹದದನು ಒಪ್ಪಿ ತನ್ನ ಸೇನಾಪತಿಗಳನ್ನು ಇಸ್ರೇಲಿನ ಪಟ್ಟಣಗಳ ಮೇಲೆ ಆಕ್ರಮಣ ಮಾಡಲು ಕಳುಹಿಸಿದನು. ಅವರು ಹೋಗಿ ಇಯ್ಯೋನ್, ದಾನ್, ಅಬೇಲ್ಮಯಿಮ್ ಎಂಬ ಪಟ್ಟಣಗಳ ಮೇಲೆಯೂ ಭಂಡಾರಗಳನ್ನು ಇಟ್ಟಿದ ನಫ್ತಾಲಿ ಪ್ರಾಂತ್ಯದ ಎಲ್ಲಾ ಪಟ್ಟಣಗಳ ಮೇಲೆಯೂ ಆಕ್ರಮಣ ಮಾಡಿದರು. 5 ಇದನ್ನು ಕೇಳಿದ ಬಾಷನು ರಾಮ್ದ ಪಟ್ಟಣವನ್ನು ಕೋಟೆಯಾಗಿ ಕಟ್ಟುವ ಕೆಲಸವನ್ನು ಬಿಟ್ಟುಬಿಟ್ಟನು, 6 ಆಗ ಆಸನೂ ಇಸ್ರೇಲಿನ ಎಲ್ಲಾ ಜನರೂ ಒಟ್ಟಿಗೆ ರಾಮ್ದಕ್ಕೆ ಹೋಗಿ ಅಲ್ಲಿ ಬಾಷನು ಕೋಟೆಕಟ್ಟಲು ತಂದಿಟ್ಟಿದ್ದ ಕಲ್ಲುಮರಗಳನ್ನೆಲ್ಲಾ ತೆಗೆದು ಮಿಚ್ಪ ಮತ್ತು ಗೆಬ ಪಟ್ಟಣಗಳನ್ನು ಭದ್ರಪಡಿಸಿದರು.

7 ಆಗ ದೇವದರ್ಶಿಯಾದ ಹನಾನಿಯು ಯೆಹೂದದ ರಾಜನಾದ ಆಸನ ಬಳಿಗೆ ಬಂದು, ‘‘ಆಸನೇ, ನೀನು ದೇವರಾದ ಯೆಹೋವನ ಮೇಲೆ ಭರವಸನ್ನಿಡುವ ಬದಲು ಅರಾಮ್ಯರ ಅರಸನ ಮೇಲೆ ಭರವಸವನ್ನಿಟ್ಟಿದ್ದರಿಂದ ಅರಾಮ್ಯರ ಸೈನ್ಯವು ನಿನ್ನ ಕೈಗೆ ಬೀಳದಂತೆ ತಪ್ಪಿಸಿಕೊಂಡಿತು. 8 ಇಥಿಯೋಪಿಯಾದವರಿಗೆ ಮತ್ತು ಲಿಬ್ಯದವರಿಗೆ ಮಹಾದೊಡ್ಡ ಸೈನ್ಯವಿತ್ತು. ಅಪರಿಮಿತವಾದ ರಥಾಶ್ವಗಳಿದ್ದವು. ಆದರೆ ಅವರನ್ನು ಸೋಲಿಸುವಂತೆ ಯೆಹೋವನು ನಿನಗೆ ಸಹಾಯಿಸಿದನು. 9 ದೇವರು ಲೋಕವನ್ನೆಲ್ಲಾ ದೃಷ್ಟಿಸಿ ನೋಡಿ ತನ್ನ ನಂಬಿಗಸ್ತರನ್ನು ಕಂಡುಕೊಂಡು ಅವರನ್ನು ಬಲಿಷ್ಠರನ್ನಾಗಿ ಮಾಡುವನು. ಆಸನೇ, ನೀನು ಮೂರ್ಖ ಕೆಲಸ ಮಾಡಿದೆ. ಇಂದಿನಿಂದ ಯಾವಾಗಲೂ ನಿನಗೆ ಯುದ್ಧವಿರುವದು.’’

10 ಇದನ್ನು ಕೇಳಿದ ಆಸನು ಹನಾನಿಯ ಮೇಲೆ ಬಹುಕೋಪಗೊಂಡು ಅವನನ್ನು ಸೆರೆಮನೆಯಲ್ಲಿ ಹಾಕಿಸಿದನು. ಆಸನು ಅದೇ ಸಮಯದಲ್ಲಿ ದೇವಜನರಾದ ಕೆಲವರೊಂದಿಗೆ ಕ್ರೂರವಾಗಿ ವರ್ತಿಸಿದನು.

11 ಆಸನು ಪ್ರಾರಂಭದಿಂದ ಕೊನೆಯವರೆಗೆ ಮಾಡಿದ ಎಲ್ಲಾ ವಿಷಯಗಳು ಯೆಹೂದ ಮತ್ತು ಇಸ್ರೇಲ್ ರಾಜರ ಗ್ರಂಥದಲ್ಲಿ ಬರೆಯಲ್ಪಟ್ಟಿವೆ. 12 ಆಸನ ಆಳ್ವಿಕೆಯ ಮೂವತ್ತೊಂಬತ್ತನೆಯ ವರುಷದಲ್ಲಿ ಅವನ ಕಾಲಿಗೆ ರೋಗ ಬಂದಿತು. ಅದು ಅಧಿಕವಾಗಿ ಹೆಚ್ಚಿದ್ದರಿಂದ ಅವನು ಯೆಹೋವನ ಸಹಾಯವನ್ನು ಕೇಳದೆ ವೈದ್ಯರ ನೆರವನ್ನೇ ಪಡೆದನು. 13 ಆಸನು ತನ್ನ ಆಳ್ವಿಕೆಯ ನಲವತ್ತೊಂದನೆಯ ವರ್ಷದಲ್ಲಿ ತನ್ನ ಪೂರ್ವಿಕರ ಬಳಿ ಸೇರಿದನು. 14 ಅವನು ತನಗಾಗಿ ದಾವೀದನಗರದಲ್ಲಿ ಮಾಡಿಸಿದ್ದ ಸಮಾಧಿಯಲ್ಲಿಯೇ ಅವನಿಗೆ ಸಮಾಧಿಮಾಡಿದರು. ನಾನಾತರದ ಪರಿಮಳ ದ್ರವ್ಯಗಳಿಂದ ತುಂಬಿದ್ದ ಹಾಸಿಗೆಯ ಮೇಲೆ ಮಲಗಿಸಿದ್ದರು. ಆಮೇಲೆ ಅವನ ಗೌರವಾರ್ಥವಾಗಿ ಒಂದು ದೊಡ್ಡ ಬೆಂಕಿಕೊಂಡವನ್ನು ಮಾಡಿ ಪರಿಮಳ ಧೂಪವನ್ನು ಸುಟ್ಟರು.

## ಯೆಹೂದದ ಅರಸನಾದ ಯೆಹೋಷಾಫಾಟನು

17 ಆಸನ ಮಗನಾದ ಯೆಹೋಷಾಫಾಟನು ಪಟ್ಟಕ್ಕೆ ಬಂದನು. ಅವನು ತನ್ನ ರಾಜ್ಯವನ್ನು ಬಲಪಡಿಸಿ ಇಸ್ರೇಲರಿಂದ ತನಗೆ ಅಪಾಯವಾಗದಂತೆ ಸುರಕ್ಷೆಯ ವ್ಯವಸ್ಥೆ ಮಾಡಿಕೊಂಡನು. 2 ಯೆಹೂದದ ಎಲ್ಲಾ ಕೋಟೆಗಳುಳ್ಳ ಪಟ್ಟಣಗಳಲ್ಲಿಯೂ ತನ್ನ ತಂದೆಯು ವಶಪಡಿಸಿಕೊಂಡಿದ್ದ ಎಫ್ರಾಯೀಮ್ ಪ್ರಾಂತ್ಯದ ಪಟ್ಟಣಗಳಲ್ಲಿಯೂ ಸೈನ್ಯವನ್ನಿಟ್ಟನು.

3 ಯೆಹೋವನು ಯೆಹೋಷಾಫಾಟನೊಂದಿಗೆ ಇದ್ದನು; ಯಾಕಂದರೆ ಯೆಹೋಷಾಫಾಟನು ತನ್ನ ಯೌವನ ಕಾಲದಲ್ಲಿಯೆ ತನ್ನ ಪೂರ್ವಿಕನಾದ ದಾವೀದನಂತೆ ಯೆಹೋವನ ದೃಷ್ಟಿಯಲ್ಲಿ ಒಳ್ಳೆಯವನಾಗಿ ಬಾಳನ ಪೂಜೆಯನ್ನು ಮಾಡಲಿಲ್ಲ. 4 ತನ್ನ ಪೂರ್ವಿಕರು ಅನುಸರಿಸಿದ ದೇವರನ್ನು ನಿರೀಕ್ಷಿಸಿದನು. ಆತನ ಆಜ್ಞೆಗಳನ್ನು

ಅನುಸರಿಸಿದನು. ಇಸ್ರೇಲಿ ಅರಸರು ನಡೆದಂತೆ ಇವನು
ನಡೆಯಲಿಲ್ಲ. [5]ಯೆಹೋವನು ಯೆಹೋಷಾಫಾಟನಿ
ಗಾಗಿ ರಾಜ್ಯದ ಅಧಿಕಾರವನ್ನು ಸ್ಥಿರಪಡಿಸಿದನು. ಯೆಹೂ
ದದ ಜನರೆಲ್ಲರು ಅವನಿಗೆ ಕಾಣಿಕೆಗಳನ್ನು ತಂದು
ಕೊಟ್ಟರು. ಆದುದರಿಂದ ಅವನಿಗೆ ಐಶ್ವರ್ಯವೂ ಘನ
ತೆಯೂ ದೊರಕಿತು. [6]ಅವನ ಹೃದಯವು ಯೆಹೋವನ
ಮಾರ್ಗಗಳಲ್ಲಿ ಆನಂದವನ್ನು ಕಂಡುಕೊಂಡಿತು.*
ಯೆಹೂದ ಪ್ರಾಂತ್ಯದಲ್ಲಿ ವಿಗ್ರಹಗಳ ಪೂಜಾಸ್ಥಳಗಳ
ನ್ನೆಲ್ಲಾ ತೆಗೆದುಹಾಕಿಸಿ ಅಶೇರ ಸ್ತಂಭಗ’ಳನ್ನು ಕಡಿದು
ಹಾಕಿಸಿ ಅವುಗಳನ್ನು ನಿರ್ಮೂಲ ಮಾಡಿದನು.

[7]ತನ್ನ ಆಳ್ವಿಕೆಯ ಮೂರನೆಯ ವರುಷದಲ್ಲಿ ಯೆಹೂ
ದದ ಎಲ್ಲಾ ಪಟ್ಟಣಗಳಿಗೆ ನಾಯಕರನ್ನು ಕಳುಹಿಸಿ ಜನರಿಗೆ
ದೇವರ ವಿಧಿನಿಯಮಗಳು ಬೋಧಿಸಲ್ಪಡುವಂತೆ ಮಾಡಿ
ದನು. ಆ ನಾಯಕರು ಯಾರೆಂದರೆ: ಬೆನ್ಹೈಲ್, ಓಬದ್ಯ,
ಜೆಕರ್ಯ ನೆತನೇಲ್ ಮತ್ತು ಮೀಕಾಯ. [8]ಯೆಹೋ
ಷಾಫಾಟನು ಅವರೊಂದಿಗೆ ಲೇವಿಯರನ್ನೂ ಕಳುಹಿಸಿ
ದನು. ಅವರು ಯಾರೆಂದರೆ: ಶೆಮಾಯ, ನೆತನ್ಯ, ಜೆಬದ್ಯ,
ಅಸಾಹೇಲ್, ಶೆಮೀರಾಮೋತ್, ಯೆಹೋನಾತಾನ್,
ಅದೋನೀಯ ಮತ್ತು ಟೋಬೀಯ. ಅವರೊಂದಿಗೆ
ಕಳುಹಿಸಲ್ಪಟ್ಟ ಯಾಜಕರು ಯಾರೆಂದರೆ: ಎಲೀಷಾಮಾ
ಮತ್ತು ಯೆಹೋರಾಮ. [9]ಇವರೆಲ್ಲಾ ಯೆಹೂದದ ಜನ
ರಿಗೆ ಯೆಹೋವನ ಧರ್ಮೋಪದೇಶ ಪುಸ್ತಕದಿಂದ ಆತನ
ಕಟ್ಟಳೆ ವಿಧಿ ನಿಯಮಗಳನ್ನು ಯೆಹೂದದ ಪಟ್ಟಣ
ಗಳಲ್ಲೆಲ್ಲಾ ಸಂಚರಿಸಿ ಕಲಿಸಿದರು.

[10]ಯೆಹೂದದ ಸುತ್ತಮುತ್ತಲಿನ ದೇಶಗಳ ಜನಾಂಗ
ಗಳು ಯೆಹೋವನಿಗೆ ಭಯಪಟ್ಟರು. ಆದುದರಿಂದ
ಅವರು ಯೆಹೋಷಾಫಾಟನ ಮೇಲೆ ಯುದ್ಧಕ್ಕೆ ಹೋಗ
ಲಿಲ್ಲ. [11]ಫಿಲಿಷ್ಟಿಯರಲ್ಲಿ ಕೆಲವರು ಅವನಿಗೆ ಬೆಳ್ಳಿ
ಬಂಗಾರಗಳ ಕಾಣಿಕೆಗಳನ್ನು ತಂದುಕೊಟ್ಟರು; ಅವ
ನೊಬ್ಬ ಬಲಿಷ್ಠನಾದ ರಾಜನೆಂದು ಅವರು ತಿಳಿದು
ಕೊಂಡಿದ್ದರು. ಅರಬಿಯದ ಜನರು ಯೆಹೋಷಾ
ಫಾಟನಿಗೆ ಪಶುಗಳ ಹಿಂಡುಗಳನ್ನು ತಂದುಕೊಟ್ಟರು.
ಅವುಗಳಲ್ಲಿ ಏಳು ಸಾವಿರದ ಏಳು ನೂರು ಟಗರುಗಳು
ಮತ್ತು ಏಳು ಸಾವಿರದ ಏಳು ನೂರು ಹೋತಗಳು ಇದ್ದವು.

[12]ಯೆಹೋಷಾಫಾಟನು ಅತ್ಯಧಿಕವಾಗಿ ವೃದ್ಧಿ ಹೊಂದಿ
ದೊಡ್ಡ ಅರಸನಾದನು. ಅವನು ಯೆಹೂದ ದೇಶ
ದಲ್ಲೆಲ್ಲಾ ಕೋಟೆಗಳನ್ನು ಕಟ್ಟಿಸಿದನು. ಉಗ್ರಾಣ ನಗರ
ಗಳನ್ನು ಕಟ್ಟಿಸಿದನು. [13]ಅವುಗಳಲ್ಲಿ ಬೇಕಾದ ಸಾಮಾಗ್ರಿ
ಗಳನ್ನು ಸಂಗ್ರಹಿಸಿಟ್ಟನು. ಜೆರುಸಲೇಮಿನಲ್ಲಿ ನುರಿತ
ಸೈನ್ಯವನ್ನು ಇರಿಸಿದನು.

[14]ಅವರು ಬೇರೆ ಬೇರೆ ಕುಲಗಳಿಂದ ಬಂದವ
ರಾಗಿದ್ದರು.

ಯೆಹೂದಕುಲದ ಅದ್ನನು ಮೂರು ಲಕ್ಷ ಸೈನಿಕರಿಗೆ
ಸೇನಾಪತಿಯಾಗಿದ್ದನು. [15]ಯೆಹೋಹಾನಾನನು ಎರಡು
ಲಕ್ಷ ಎಂಭತ್ತು ಸಾವಿರ ಸೈನಿಕರಿಗೆ ಸೇನಾಪತಿಯಾಗಿದ್ದನು.
[16]ಅಮಸ್ಯನು ಎರಡು ಲಕ್ಷ ಸೈನಿಕರಿಗೆ ಸೇನಾಪತಿ
ಯಾಗಿದ್ದನು. ಅಮಸ್ಯನು ಜಿಕ್ರಿಯ ಮಗ. ಯೆಹೋವನ
ಸೇವೆಮಾಡುವದಕ್ಕೆ ಅವನು ತನ್ನನ್ನು ಒಪ್ಪಿಸಿಕೊಟ್ಟಿದ್ದನು.

[17]ಬೆನ್ಯಾಮೀನನ ಕುಲದ ಎಲ್ಯಾದನು ಎರಡು ಲಕ್ಷ
ಸೈನಿಕರಿಗೆ ಸೇನಾಪತಿಯಾಗಿದ್ದನು. ಇವರು ಬಿಲ್ಲು, ಬಾಣ,
ಗುರಾಣಿಗಳನ್ನು ಬಳಸಬಲ್ಲವರಾಗಿದ್ದರು. ಎಲ್ಯಾದನು
ಶೂರನಾದ ಸೇನಾಪತಿ. [18]ಯೆಹೋಜಾಬಾದನು ಒಂದು
ಲಕ್ಷ ಎಂಭತ್ತು ಸಾವಿರ ಸೈನಿಕರಿಗೆ ಸೇನಾಪತಿಯಾಗಿದ್ದನು.
[19]ಈ ಸೈನಿಕರೆಲ್ಲಾ ಯೆಹೋಷಾಫಾಟನ ಸೇವೆಮಾಡಿ
ದರು. ಇವರಲ್ಲದೆ ಯೆಹೂದದೇಶದಲ್ಲೆಲ್ಲಾ ಇದ್ದ ಕೋಟೆ
ಗಳಲ್ಲಿಯೂ ಸೈನಿಕರಿದ್ದರು.

### ಅಹಾಬನಿಗೆ ಮೀಕಾಯೆಹುವಿನ ಎಚ್ಚರ

18 ಯೆಹೋಷಾಫಾಟನಿಗೆ ಅತ್ಯಧಿಕವಾದ ಐಶ್ವ
ರ್ಯವೂ ಘನತೆಯೂ ಇದ್ದವು. ಅವನು ಅರಸ
ನಾದ ಅಹಾಬನೊಂದಿಗೆ ತನ್ನ ಮದುವೆಯ ಮೂಲಕ
ಸಂಬಂಧ ಬೆಳೆಸಿಕೊಂಡನು. [2]ಕೆಲವು ವರುಷಗಳ ನಂತರ
ಯೆಹೋಷಾಫಾಟನು ಸಮಾರ್ಯ ಪಟ್ಟಣದಲ್ಲಿ ಅಹಾಬ
ನನ್ನು ಸಂಧಿಸಲು ಹೋದನು. ಯೆಹೋಷಾಫಾಟನಿಗೂ
ಅವನೊಂದಿಗೆ ಬಂದಿದ್ದ ಜನರಿಗೂ ಅಹಾಬನು ಅನೇಕ
ದನ ಕುರಿಗಳನ್ನು ವಧಿಸಿ ಔತಣಮಾಡಿಸಿದನು.
ರಾಮೋತ್‌ಗಿಲ್ಯಾದ್ ಪಟ್ಟಣದ ಮೇಲೆ ಯುದ್ಧ
ಮಾಡಲು ಅಹಾಬನು ಯೆಹೋಷಾಫಾಟನನ್ನು ಪ್ರೇರೇ
ಪಿಸಿದನು. [3]ಇಸ್ರೇಲರ ಅರಸನಾದ ಅಹಾಬನು ಯೆಹೂ
ದದ ಅರಸನಾದ ಯೆಹೋಷಾಫಾಟನಿಗೆ, ‘‘ನೀನು
ನನ್ನೊಂದಿಗೆ ರಾಮೋತ್‌ಗಿಲ್ಯಾದಿಗೆ ಯುದ್ಧಮಾಡಲು
ಬರುವಿಯಾ?’’ ಎಂದು ಕೇಳಲು ಯೆಹೋಷಾಫಾಟನು,
‘‘ನಾನು ನಿನ್ನವನೆ, ನನ್ನ ಜನರು ನಿನ್ನ ಜನರೇ ಆಗಿದ್ದಾರೆ.
ನಾವು ಯುದ್ಧಮಾಡಲು ನಿಮ್ಮೊಂದಿಗೆ ಬರುತ್ತೇವೆ’’
ಎಂದು ಅಹಾಬನಿಗೆ ಉತ್ತರಿಸಿದನು. [4]ಯೆಹೋಷಾ
ಫಾಟನು ಅಹಾಬನಿಗೆ, ‘‘ಆದರೆ ಮೊದಲು ನಾವು
ಯೆಹೋವನನ್ನು ವಿಚಾರಿಸೋಣ’’ ಅಂದನು.

[5]ಆಗ ಅಹಾಬನು ನಾನೂರು ಮಂದಿ ಪ್ರವಾದಿಗಳನ್ನು
ಒಟ್ಟಾಗಿ ಸೇರಿಸಿ ಅವರಿಗೆ, ‘‘ನಾವು ರಾಮೋತ್‌ಗಿಲ್ಯಾದಿನ
ಮೇಲೆ ಯುದ್ಧಕ್ಕೆ ಹೊರಡಬೇಕೋ ಬೇಡವೋ?’’
ಎಂದು ಕೇಳಿದಾಗ ಆ ಪ್ರವಾದಿಗಳು ಅಹಾಬನಿಗೆ,
‘‘ಹೋಗು, ದೇವರು ರಾಮೋತ್‌ಗಿಲ್ಯಾದನ್ನು ಸೋಲಿಸು
ವಂತೆ ಮಾಡುವನು’’ ಎಂದು ಹೇಳಿದರು.

---

**ಯೆಹೋವ ... ಕೊಂಡಿತು** ಅಕ್ಷರಶಃ ‘‘ದೇವರ ಮಾರ್ಗಗಳಲ್ಲಿ ನಡೆಯಲು ಅವನು ಬಹಳ ಹೆಮ್ಮೆಯುಳ್ಳವನಾಗಿದ್ದನು.’’

6ಆಗ ಯೆಹೋಷಾಫಾಟನು,'ಈ ಪ್ರವಾದಿಗಳಲ್ಲದೆ
ಬೇರೆ ಪ್ರವಾದಿಗಳಿಲ್ಲವೆ? ಅವರ ಮೂಲಕ ನಾವು
ಯೆಹೋವನನ್ನು ಕೇಳೋಣ'' ಎಂದನು.

7ಆಗ ಅರಸನಾದ ಅಹಾಬನು, ''ಇನ್ನೂ ಒಬ್ಬನು
ಇದ್ದಾನೆ. ನಾವು ಅವನಿಂದ ಯೆಹೋವನನ್ನು ವಿಚಾರಿಸ
ಬಹುದು. ಆದರೆ ನಾನು ಅವನನ್ನು ದ್ವೇಷಿಸುತ್ತೇನೆ.
ಯಾಕಂದರೆ ನನ್ನ ವಿಷಯವಾಗಿ ಯೆಹೋವನಿಂದ
ಯಾವ ಒಳ್ಳೆಯ ಸಂದೇಶವನ್ನೂ ಅವನು ಕೊಡುವದಿಲ್ಲ.
ನನ್ನ ಬಗ್ಗೆ ಯಾವಾಗಲೂ ಕೆಟ್ಟದ್ದನ್ನೇ ನುಡಿಯುತ್ತಾನೆ.
ಅವನು ಇಮ್ಲನ ಮಗನಾದ ಮೀಕಾಯೆಹುವು,''
ಅಂದನು. ಅದಕ್ಕೆ ಯೆಹೋಷಾಫಾಟನು, ''ಅಹಾಬನೇ,
ನೀನು ಹಾಗೆ ಹೇಳಬಾರದು'' ಅಂದನು.

8ಆಗ ಆಹಾಬನು ತನ್ನ ಸೇವಕರಲ್ಲೊಬ್ಬನನ್ನು ಕರೆದು,
''ಬೇಗ ಹೋಗಿ ಇಮ್ಲನ ಮಗನಾದ ಮೀಕಾಯೆಹುವನ್ನು
ಕರೆದುಕೊಂಡು ಬಾ'' ಎಂದು ಆಜ್ಞಾಪಿಸಿದನು.

9ಇಸ್ರೇಲರ ಅರಸನಾದ ಅಹಾಬನೂ ಯೆಹೂದ್ಯರ
ಅರಸನಾದ ಯೆಹೋಷಾಫಾಟನೂ ತಮ್ಮ ರಾಜವಸ್ತ್ರ
ಗಳನ್ನು ಧರಿಸಿದ್ದರು. ಅವರು ಸಮಾರ್ಯ ಪಟ್ಟಣದ
ಮುಂಭಾಗದ ಬಾಗಿಲಿನೆದುರು ಸಿಂಹಾಸನಗಳ ಮೇಲೆ
ಕುಳಿತಿದ್ದರು. ಆ ನಾನೂರು ಮಂದಿ ಪ್ರವಾದಿಗಳು ಅವರ
ಮುಂದೆ ನಿಂತುಕೊಂಡು ಪ್ರವಾದಿಸುತ್ತಿದ್ದರು. 10ಚಿದ್ಕೀ
ಯನು ಕೆನಾನನ ಮಗ. ಚಿದ್ಕೀಯನು ಕಬ್ಬಿಣದ ಕೊಂಬು
ಗಳನ್ನು ತಯಾರಿಸಿ, ''ಇದು ಯೆಹೋವನ ನುಡಿ. ಈ
ಕಬ್ಬಿಣದ ಕೊಂಬುಗಳಿಂದಲೋ ಎಂಬಂತೆ ನೀನು
ಅರಾಮ್ಯರನ್ನು ನಾಶಮಾಡುವೆ'' ಎಂದು ಹೇಳಿದನು.

11ಅಲ್ಲಿದ್ದ ಪ್ರವಾದಿಗಳೆಲ್ಲರೂ ಅದನ್ನೇ ನುಡಿದರು.
ಅವರು, ''ನೀನು ರಾಮೋತ್‌ಗಿಲ್ಯಾದಿಗೆ ಹೋಗು. ನಿನ
ಗಲ್ಲಿ ಜಯವಾಗುವದು. ಯೆಹೋವನು ಅರಾಮ್ಯರನ್ನು
ಸೋಲಿಸುವಂತೆ ನಿನಗೆ ಸಹಾಯಿಸುವನು'' ಎಂದರು.

12ಮೀಕಾಯೆಹುವಿನ ಬಳಿಗೆ ಹೋದ ರಾಜನ ಸೇವ
ಕನು ಅವನಿಗೆ, ''ಮೀಕಾಯೇಹುವೇ ಕೇಳು, ಎಲ್ಲಾ
ಪ್ರವಾದಿಗಳೂ ರಾಜನು ಗೆಲ್ಲುವನು ಎಂದು ಪ್ರವಾದಿಸು
ತ್ತಿದ್ದಾರೆ. ಅದನ್ನೇ ನೀನು ಹೇಳಿ ಅರಸನಿಗೆ ಶುಭವನ್ನು
ಹಾರೈಸಬೇಕು''ಅಂದನು.

13ಆದರೆ ಮೀಕಾಯೆಹುವು, ''ಯೆಹೋವನಾಣೆ,
ಆತನು ಹೇಳಿದ್ದನ್ನೇ ನಾನು ಹೇಳುವೆನು'' ಎಂದನು.

14ಮೀಕಾಯೆಹುವು ಅಹಾಬನ ಬಳಿಗೆ ಬಂದಾಗ ಅರ
ಸನು, ''ಮೀಕಾಯೆಹುವೇ, ನಾವು ರಾಮೋತ್ ಗಿಲ್ಯಾ
ದಿನ ಮೇಲೆ ಯುದ್ಧಕ್ಕೆ ಹೊರಡಬಹುದೋ?'' ಎಂದು
ವಿಚಾರಿಸಿದಾಗ ಮೀಕಾಯೆಹುವು, ''ಹೋಗಿ, ಯುದ್ಧ
ಮಾಡಿರಿ. ದೇವರು ಅವರನ್ನು ನಿನ್ನ ಕೈಗಳಿಗೆ ಒಪ್ಪಿಸು
ವನು'' ಎಂದು ಹೇಳಿದನು.

15ಆಗ ಅಹಾಬನು ಮೀಕಾಯೆಹುವಿಗೆ, ''ನೀನು
ಯೆಹೋವನ ಹೆಸರಿನಲ್ಲಿ ನನಗೆ ಸತ್ಯವನ್ನೇ ತಿಳಿಸ
ಬೇಕೆಂದು ಎಷ್ಟೋ ಸಲ ನಿನ್ನಿಂದ ಪ್ರಮಾಣ ಮಾಡಿಸಿ
ರುತ್ತೇನೆ''ಎಂದು ಹೇಳಿದಾಗ ಮೀಕಾಯೆಹುವು,

16''ಇಸ್ರೇಲಿನ ಜನರೆಲ್ಲರೂ ಬೆಟ್ಟಪ್ರದೇಶಗಳಲ್ಲಿ
ಚದರಿರುವದನ್ನು ಕಂಡೆನು. ಅವರು ಕುರುಬನಿಲ್ಲದ
ಕುರಿಗಳಂತಿದ್ದರು. ಕರ್ತನು ಹೇಳಿದ್ದೇನೆಂದರೆ, 'ಅವರಿಗೆ
ನಾಯಕರಿಲ್ಲ, ಆದುದರಿಂದ ಸುರಕ್ಷಿತವಾಗಿ ಮನೆಗೆ
ಹಿಂದಿರುಗಲಿ'' ಎಂದು ಹೇಳಿದನು.

17ಇಸ್ರೇಲಿನ ರಾಜನಾದ ಅಹಾಬನು ಯೆಹೋಷಾಫಾ
ಟನಿಗೆ, ''ಮೀಕಾಯೆಹುವು ನನ್ನ ಬಗ್ಗೆ ಯೆಹೋವನಿಂದ
ಒಳ್ಳೆಯ ಸಂದೇಶವನ್ನು ಕೊಡುವದೇ ಇಲ್ಲವೆಂದು ನಿನಗೆ
ಹೇಳಿದೆನಲ್ಲಾ? ಅವನಲ್ಲಿ ನನ್ನ ವಿಷಯವಾಗಿ ಕೆಟ್ಟ
ಸಂದೇಶವೇ ಇರುವದು''ಎಂದು ಹೇಳಿದನು.

18ಮೀಕಾಯೆಹುವು, ''ಯೆಹೋವನಿಂದ ಬಂದ
ಸಂದೇಶವನ್ನು ಕೇಳು. ಯೆಹೋವನು ಸಿಂಹಾಸನದಲ್ಲಿ
ಕುಳಿತಿರುವದನ್ನು ನಾನು ಕಂಡೆನು. ಅವನ ಎಡಬಲಗಳಲ್ಲಿ
ಪರಲೋಕದ ಸೈನ್ಯವು ನಿಂತಿತ್ತು. 19ರಾಮೋತ್‌ಗಿಲ್ಯಾದಿನ
ಮೇಲೆ ಯುದ್ಧಮಾಡಲು ಅಹಾಬನನ್ನು ಯಾರು ಮರು
ಳುಗೊಳಿಸುವರು? ಯಾಕಂದರೆ ಅಲ್ಲಿ ಅವನು ಸಾಯ
ಬೇಕು' ಎಂದು ಯೆಹೋವನು ಕೇಳಿದಾಗ ಅಲ್ಲಿ
ನಿಂತಿದ್ದವರು ಬೇರೆ ಬೇರೆ ವಿಧಾನವನ್ನು ತಿಳಿಸಿದರು.
20ಆಗ ಒಂದು ಆತ್ಮವು ದೇವರ ಮುಂದೆ ನಿಂತು, 'ನಾನು
ಅಹಾಬನನ್ನು ಮರುಳುಗೊಳಿಸುತ್ತೇನೆ' ಎಂದು ಹೇಳಿತು.
'ಹೇಗೆ?' ಎಂದು ಆತನು ಕೇಳಿದನು. 21ಅದಕ್ಕೆ ಆತ್ಮವು,
'ನಾನು ಹೋಗಿ ಅಹಾಬನ ಪ್ರವಾದಿಗಳಿಗೆ ಸುಳ್ಳುಹೇಳುವ
ಆತ್ಮವಾಗುತ್ತೇನೆ' ಎಂದು ಹೇಳಿತು. ಅದಕ್ಕೆ ಆತನು 'ಸರಿ
ಹಾಗೆಯೇ ಮಾಡು. ನೀನು ನಿನ್ನ ಕಾರ್ಯದಲ್ಲಿ ಸಫಲ
ವಾಗುವೆ' ಎಂದು ಹೇಳಿದನು.

22ಆದುದರಿಂದ ಅಹಾಬನೇ, ನಿನ್ನ ಪ್ರವಾದಿಗಳ
ಬಾಯಿಯಲ್ಲಿ ಸುಳ್ಳು ಹೇಳುವ ಆತ್ಮವನ್ನು ಯೆಹೋವನೇ
ಇರಿಸಿದ್ದಾನೆ; ನಿನಗೆ ಕೇಡಾಗುವುದೆಂದು ಯೆಹೋವನೇ
ತಿಳಿಸುತ್ತಾನೆ'' ಎಂದನು.

23ಆಗ ಚಿದ್ಕೀಯನು ಮುಂದೆ ಬಂದು ಮೀಕಾ
ಯೆಹುವಿನ ಕೆನ್ನೆಗೆ ಹೊಡೆದು, ''ಮೀಕಾಯೆಹುವೇ,
ಯೆಹೋವನ ಆತ್ಮನು ನಿನ್ನೊಂದಿಗೆ ಮಾತಾಡಲು ನನ್ನ
ಬಳಿಯಿಂದ ಬಂದಾಗ ಯಾವ ಕಡೆಗೆ ಹೋದನು?''
ಎಂದು ಗೇಲಿಮಾಡಿದಾಗ, 24ಮೀಕಾಯೆಹುವು ''ಚಿದ್ಕೀ
ಯನೇ, ನೀನು ಒಳ ಕೋಣೆಯೊಳಗೆ ಅವಿತು ಕುಳಿತಿರುವ
ದಿನದಲ್ಲಿ ನಿನಗೆ ತಿಳಿಯುವದು'' ಎಂದು ಹೇಳಿದನು.

25ಆಗ ಅರಸನಾದ ಅಹಾಬನು, ಮೀಕಾಯೆಹುವನ್ನು
ತೆಗೆದುಕೊಂಡು ನಗರಪಾಲಕನಾದ ಆಮೋನನಿಗೂ
ಮತ್ತು ರಾಜಕುಮಾರನಾದ ಯೋವಾಷನಿಗೂ ಕೊಟ್ಟು,

26ಅವರಿಗೆ, ''ಮೀಕಾಯೆಹುವನ್ನು ಸೆರೆಮನೆಗೆ ಹಾಕಿ. ನಾನು ಯುದ್ಧದಿಂದ ಸುರಕ್ಷಿತವಾಗಿ ಹಿಂತಿರುಗುವ ತನಕ ಬರಿ ರೊಟ್ಟಿ ಮತ್ತು ನೀರನ್ನು ಮಾತ್ರ ಅವನಿಗೆ ಕೊಡಿ ಎಂದು ಅರಸನು ಆಜ್ಞಾಪಿಸುತ್ತಾನೆ ಎಂದು ಹೇಳಿ'' ಎಂದನು.

27ಆಗ ಮೀಕಾಯೆಹುವು, ''ಅಹಾಬನೇ, ನೀನು ರಣರಂಗದಿಂದ ಸುರಕ್ಷಿತವಾಗಿ ಬಂದರೆ ಯೆಹೋವನು ನನ್ನ ಮೂಲಕ ಮಾತನಾಡಲಿಲ್ಲವೆಂದು ತಿಳಿದುಕೋ. ಜನರೇ, ನನ್ನ ಮಾತನ್ನು ಕೇಳಿ ನೆನಪಿನಲ್ಲಿಡಿರಿ'' ಎಂದು ಉತ್ತರಕೊಟ್ಟನು.

### ರಾಮೋತ್ ಗಿಲ್ಯಾದಿನಲ್ಲಿ ಅಹಾಬನು ಕೊಲ್ಲಲ್ಪಟ್ಟದ್ದು

28ಇಸ್ರೇಲಿನ ರಾಜನಾದ ಅಹಾಬನೂ ಯೆಹೂದದ ರಾಜನಾದ ಯೆಹೋಷಾಫಾಟನೂ ರಾಮೋತ್ ಗಿಲ್ಯಾದ್ ಪಟ್ಟಣದ ಮೇಲೆ ಧಾಳಿ ಮಾಡಿದರು.
29ಯೆಹೋಷಾಫಾಟನಿಗೆ ಅಹಾಬನು, ನಾನು ಯುದ್ಧ ರಂಗಕ್ಕೆ ಹೋಗುವ ಮೊದಲು ವೇಷ ಬದಲಾಯಿಸುತ್ತೇನೆ. ನೀನು ರಾಜವಸ್ತ್ರದಲ್ಲಿಯೇ ಇರು'' ಎಂದು ಹೇಳಿ ತನ್ನ ರೂಪವನ್ನು ಬದಲಾಯಿಸಿದನು. ಇಬ್ಬರು ರಾಜರೂ ಯುದ್ಧರಂಗಕ್ಕಿಳಿದರು.

30ಅರಾಮ್ಯರ ರಾಜನು ತನ್ನ ರಥದ ಅಧಿಪತಿಗಳಿಗೆ, ''ನೀವು ಜನರೊಂದಿಗೆ ಯುದ್ಧಮಾಡಬೇಡಿರಿ, ಅಧಿಕಾರಿಗಳ ಮತ್ತು ಸಾಮಾನ್ಯ ಸೈನಿಕರ ಗೊಡವೆಗೆ ಹೋಗಬೇಡಿರಿ. ಆದರೆ ''ನೀವು ಇಸ್ರೇಲಿನ ರಾಜನಾದ ಅಹಾಬನೊಂದಿಗೇ ಯುದ್ಧಮಾಡಿರಿ'' ಎಂದು ಹೇಳಿದನು.
31ರಥಾಧಿಪತಿಗಳು ಯೆಹೋಷಾಫಾಟನನ್ನು ನೋಡಿದಾಗ ಅವನೇ ಅಹಾಬನೆಂದೆಣಿಸಿ ಅವನ ಮೇಲೆ ದಾಳಿ ನಡೆಸಿದರು. ಆದರೆ ಯೆಹೋಷಾಫಾಟನು ಗಟ್ಟಿಯಾಗಿ ಕೂಗಿಕೊಂಡನು. ಆಗ ಯೆಹೋವನು ಅವನಿಗೆ ಸಹಾಯ ಮಾಡಿ ರಥಾಧಿಪತಿಗಳು ಅವನಿಂದ ಬೇರೆ ಕಡೆಗೆ ತಿರುಗುವಂತೆ ಮಾಡಿದನು.
32ಯೆಹೋಷಾಫಾಟನು ಇಸ್ರೇಲಿನ ರಾಜನಲ್ಲವೆಂದು ಅವರು ತಿಳಿದು ಅವನ ಮೇಲೆ ದಾಳಿ ಮಾಡುವುದನ್ನು ನಿಲ್ಲಿಸಿದರು.

33ಆದರೆ ಒಬ್ಬ ಸಿಪಾಯಿಯು ಬಿಲ್ಲು ತೆಗೆದು ಬಾಣವನ್ನು ಹೂಡಿ ಗುರಿಯಿಲ್ಲದೆ ಹೊಡೆದಾಗ ಆ ಬಾಣವು ಬಂದು ಇಸ್ರೇಲರ ರಾಜನಾದ ಅಹಾಬನಿಗೆ ತಾಗಿತು. ಅವನ ಕವಚದ ಸಂಧಿನಿಂದ ಅವನ ದೇಹದೊಳಗೆ ಹೊಕ್ಕಿತು. ಆಗ ಅವನು ತನ್ನ ರಥವನ್ನೋಡಿಸುವ ರಾಹುತನಿಗೆ, ''ರಥವನ್ನು ಹಿಂದಕ್ಕೆ ತಿರುಗಿಸಿ ನನ್ನನ್ನು ರಣರಂಗದಿಂದ ಹೊರಕ್ಕೆ ಕರೆದುಕೊಂಡು ಹೋಗು. ನಾನು ಗಾಯಗೊಂಡಿದ್ದೇನೆ.'' ಅಂದನು.
34ಆ ದಿವಸ ಯುದ್ಧವು ಬಲು ಬಿರುಸಾಗಿ ನಡೆಯಿತು. ಅಹಾಬನು ರಥದ ಕಂಬಕ್ಕೆ ಒರಗಿ ಸಂಜೆಯ ತನಕ ಹಾಗೆಯೇ ಅರಾಮ್ಯರ ಎದುರು ನಿಂತುಕೊಂಡಿದ್ದನು. ಸೂರ್ಯಾಸ್ತಮಾನವಾದಾಗ ಅಹಾಬನು ಸತ್ತನು.

19 ಯೆಹೂದದ ರಾಜನಾದ ಯೆಹೋಷಾಫಾಟನು ಜೆರುಸಲೇಮಿನಲ್ಲಿದ್ದ ತನ್ನ ಮನೆಗೆ ಸುರಕ್ಷಿತವಾಗಿ ಹಿಂದಿರುಗಿದನು.
2ದೇವದರ್ಶಿಯಾದ ಯೇಹೂ ಅವನನ್ನು ಎದುರುಗೊಂಡನು. ಅವನು ಹನಾನೀಯನ ಮಗ. ರಾಜನಿಗೆ ಯೇಹುವು ಹೇಳಿದ್ದೇನಂದರೆ, ''ನೀನು ದುಷ್ಟಜನರಿಗೆ ಸಹಾಯ ಮಾಡಿದ್ದೇಕೆ? ಯೆಹೋವನನ್ನು ದ್ವೇಷಿಸುವ ಜನರನ್ನು ನೀನು ಪ್ರೀತಿಸಿದ್ದೇಕೆ? ಆ ಕಾರಣಕ್ಕಾಗಿ ಯೆಹೋವನು ನಿನ್ನ ಮೇಲೆ ಕೋಪಗೊಂಡಿದ್ದಾನೆ.
3ಆದರೆ ನಿನ್ನಲ್ಲಿ ಕೆಲವಾರು ಒಳ್ಳೆಯ ವಿಷಯಗಳಿವೆ. ನೀನು ಈ ದೇಶದೊಳಗಿದ್ದ ಅಶೇರಕಂಬಗಳನ್ನು ತೆಗೆದುಹಾಕಿಸಿದೆ; ಯೆಹೋವನನ್ನು ಹಿಂಬಾಲಿಸಲು ನಿನ್ನ ಹೃದಯದಲ್ಲಿ ತೀರ್ಮಾನಿಸಿದೆ'' ಅಂದನು.

### ಯೆಹೋಷಾಫಾಟನು ನ್ಯಾಯಾಧಿಪತಿಗಳನ್ನು ಆರಿಸಿದ್ದು

4ಯೆಹೋಷಾಫಾಟನು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದನು. ಅವನು ಬೇರ್ಷೆಬ ನಗರದಿಂದ ಹಿಡಿದು ಎಫ್ರಾಯೀಮ್ ಬೆಟ್ಟದ ಪ್ರದೇಶದ ಜನರನ್ನೆಲ್ಲಾ ಸಂದರ್ಶಿಸಿದನು. ಯೆಹೋಷಾಫಾಟನು ಈ ಜನರನ್ನೆಲ್ಲ ಅವರ ಪೂರ್ವಿಕರ ದೇವರಾದ ಯೆಹೋವನ ಬಳಿಗೆ ಮತ್ತೆ ಕರೆದುಕೊಂಡು ಬಂದನು.
5ಯೆಹೋಷಾಫಾಟನು ಯೆಹೂದ ಪ್ರಾಂತ್ಯದಲ್ಲಿ ನ್ಯಾಯಾಧಿಪತಿಗಳನ್ನು ಆರಿಸಿದನು. ಯೆಹೂದದ ಪ್ರತಿಯೊಂದು ಕೋಟೆಯ ಪಟ್ಟಣಗಳಿಗೆ ನ್ಯಾಯಾಧಿಪತಿಗಳನ್ನು ನೇಮಕಮಾಡಿದನು.
6ಅವನು ಅವರಿಗೆ, ''ನೀವು ಮಾಡುವ ಕಾರ್ಯದಲ್ಲಿ ಜಾಗರೂಕರಾಗಿರಿ. ನೀವು ಯೆಹೋವನ ಪರವಾಗಿ ಜನರ ನ್ಯಾಯವನ್ನು ತೀರಿಸುವವರಾಗಿದ್ದೀರಿ. ನೀವು ನ್ಯಾಯತೀರಿಸುವಾಗ ಯೆಹೋವನು ನಿಮ್ಮ ಸಂಗಡ ಇರುವನು.
7ನಿಮ್ಮಲ್ಲಿ ಪ್ರತಿಯೊಬ್ಬರೂ ಯೆಹೋವನಿಗೆ ಭಯಪಡುವವರಾಗಿರಬೇಕು. ಆತನು ನ್ಯಾಯವಂತನಾಗಿದ್ದಾನೆ. ಆತನಿಗೆ ಎಲ್ಲಾ ಜನರು ಸಮಾನರೇ. ಆತನು ಲಂಚ ಸ್ವೀಕರಿಸಿ ನ್ಯಾಯವನ್ನು ಬದಲಾಯಿಸುವದಿಲ್ಲ'' ಎಂದು ಹೇಳಿದನು.

8ಜೆರುಸಲೇಮಿನೊಳಗೆ ಯೆಹೋಷಾಫಾಟನು ಲೇವಿಯರಲ್ಲಿ, ಯಾಜಕರಲ್ಲಿ ಮತ್ತು ಇಸ್ರೇಲರ ನಾಯಕರಲ್ಲಿ ಕೆಲವರನ್ನು ನ್ಯಾಯಾಧಿಪತಿಗಳನ್ನಾಗಿ ಆರಿಸಿದನು. ಇವರು ಜನರ ಜಗಳಗಳನ್ನು ಮತ್ತು ಸಮಸ್ಯೆಗಳನ್ನು ಯೆಹೋವನ ಕಟ್ಟಳೆಗಳ ಪ್ರಕಾರ ತೀರಿಸಬೇಕಾಗಿತ್ತು.
9ಯೆಹೋಷಾಫಾಟನು ಅವರಿಗೆ, ''ನೀವು ಹೃದಯಪೂರ್ವಕವಾಗಿ ನಿಮ್ಮ ಕೆಲಸ ನಡೆಸಬೇಕು. ನೀವು ಯೆಹೋವನಿಗೆ ಭಯಪಡುವವರಾಗಿರಬೇಕು.
10ನಿಮ್ಮ ಬಳಿಗೆ ಕೊಲೆಯ ಪ್ರಕರಣಗಳ ಬಗ್ಗೆ, ಕಟ್ಟಳೆಯ ಬಗ್ಗೆ, ಆಜ್ಞೆಯ ಬಗ್ಗೆ,

ನಿಯಮದ ಬಗ್ಗೆ ಮತ್ತು ಬೇರೆ ಯಾವುದಾದರೂ
ಕಟ್ಟಳೆಯ ಬಗ್ಗೆ ಬಗೆಹರಿಸಲು ಬರಬಹುದು. ಅವೆಲ್ಲಾ
ನಿಮ್ಮ ಸಹೋದರರಿಂದಲೇ ಬರುವವು. ದೇವರಿಗೆ
ವಿರುದ್ಧವಾಗಿ ಪಾಪಮಾಡಬಾರದೆಂಬುದಾಗಿ ಅವರಿ
ಗೆಲ್ಲಾ ಎಚ್ಚರಿಸಬೇಕು. ನೀವು ನಂಬಿಗಸ್ತಿಕೆಯಿಂದ
ಸೇವೆಮಾಡದಿದ್ದಲ್ಲಿ ನಿಮ್ಮ ಮೇಲೆಯೂ ನಿಮ್ಮ
ಸಹೋದರರ ಮೇಲೆಯೂ ದೇವರ ಕೋಪ ಉರಿಯು
ವಂತೆ ಮಾಡಿಕೊಳ್ಳುವಿರಿ. ನೀವು ತಪ್ಪಿತಸ್ಥರಾಗದೆ ನಂಬಿ
ಗಸ್ತಿಕೆಯಿಂದ ಸೇವೆಮಾಡಿರಿ. [11]ಅಮರ್ಯನು ನಿಮ್ಮ
ಪ್ರಧಾನಯಾಜಕನು. ಯೆಹೋವನ ಕಾರ್ಯಗಳಿಗೆಲ್ಲಾ
ಅವನೇ ನಿಮಗೆ ಪ್ರಮುಖನು. ಯೆಹೋವನ ಕುರಿತಾದ
ಸಂಗತಿಗಳ ಬಗ್ಗೆ ಜೆಬದ್ಯನು ಪ್ರಮುಖನಾಗಿರುವನು.
ಅವನು ಯೆಹೂದ ಕುಲದ ಇಷ್ಮಾಯೇಲನ ಮಗ.
ಲೇವಿಯರು ನಿಮಗಾಗಿ ಬರವಣಿಗೆಯ ಕೆಲಸವನ್ನು
ಮಾಡುವರು. ನೀವು ಮಾಡುವ ಕಾರ್ಯಗಳಲ್ಲಿ ಧೈರ್ಯ
ಶಾಲಿಗಳಾಗಿರಿ. ಯೆಹೋವನು ನೀತಿವಂತರೊಂದಿಗಿರು
ವನು'' ಎಂದು ಹೇಳಿದನು.

### ಯೆಹೋಷಾಫಾಟನು ಯುದ್ಧವನ್ನು ಎದುರಿಸಿದನು

20 ಕೆಲಕಾಲದನಂತರ ಮೋವಾಬ್ಯರೂ ಅಮ್ಮೋನಿ
ಯರೂ ಮೆಗೂನ್ಯರಲ್ಲಿ* ಕೆಲವರೂ ಯೆಹೋ
ಷಾಫಾಟನೊಂದಿಗೆ ಯುದ್ಧಮಾಡಲು ಬಂದರು. [2]ಕೆಲವು
ಜನರು ಯೆಹೋಷಾಫಾಟನ ಬಳಿಗೆ ಬಂದು ಎದೋ
ಮ್ಯರ ದೊಡ್ಡ ಸೈನ್ಯವು ಲವಣ ಸಮುದ್ರದ ಆಚೆಕಡೆಯಿಂದ
ನಿನಗೆ ವಿರುದ್ಧವಾಗಿ ಬರುತ್ತಿದೆ. ಈಗಾಗಲೇ ಅವರು
ಹಚಚೋನ್ ತಾಮಾರಿನಲ್ಲಿದ್ದಾರೆ (ಇದನ್ನು ಏಂಗೆದಿ
ಎಂತಲೂ ಕರೆಯುತ್ತಾರೆ.) ಎಂದು ಹೇಳಿದರು.
[3]ಯೆಹೋಷಾಫಾಟನು ಭಯಭೀತನಾಗಿ ಯೆಹೋವ
ನನ್ನು ವಿಚಾರಿಸಲು ನಿರ್ಧರಿಸಿದನು. ಯೆಹೂದದ ಎಲ್ಲಾ
ಜನರು ಉಪವಾಸ ಮಾಡಬೇಕೆಂದು ಆಜ್ಞೆ ಹೊರಡಿ
ಸಿದನು. [4]ಯೆಹೂದದ ಜನರೆಲ್ಲಾ ಯೆಹೋವನನ್ನು
ವಿಚಾರಿಸಲು ಒಟ್ಟಾಗಿ ಸೇರಿದರು.

[5]ಯೆಹೋಷಾಫಾಟನು ದೇವಾಲಯದ ಹೊಸ
ಅಂಗಳದಲ್ಲಿ ಕೂಡಿಬಂದ ಜನರೆದುರು ಎದ್ದುನಿಂತು,
[6]''ನಮ್ಮ ಪಿತೃಗಳ ದೇವರಾದ ಯೆಹೋವನೇ, ನೀನು
ಪರಲೋಕದಲ್ಲಿರುವ ದೇವರು. ಲೋಕದ ಎಲ್ಲಾ
ದೇಶಗಳನ್ನಾಳುವವನು ನೀನೇ. ಬಲ ಸಾಮರ್ಥ್ಯವುಳ್ಳ
ವನು ನೀನೇ, ಯಾರೂ ನಿನಗೆದುರಾಗಿ ನಿಲ್ಲಲಾರರು.
[7]ನೀನೇ ನಮ್ಮ ದೇವರಾಗಿರುವೆ. ನೀನು ಈ ದೇಶದಲ್ಲಿ
ವಾಸವಾಗಿದ್ದ ಜನರನ್ನು ಹೊರಡಿಸಿ ಈ ದೇಶವನ್ನು
ಅಬ್ರಹಾಮನ ಸಂತತಿಯವರಾದ ಇಸ್ರೇಲರಿಗೆ ಕೊಟ್ಟೆ.
ಅಬ್ರಹಾಮನು ನಿನ್ನ ಸ್ನೇಹಿತನಾಗಿದ್ದನು. [8]ಅಬ್ರಹಾಮನ
ಸಂತತಿಯವರು ಈ ದೇಶದಲ್ಲಿ ವಾಸವಾಗಿ ನಿನ್ನ ಹೆಸರನ್ನು
ಸ್ಥಾಪಿಸಲು ನಿನಗೊಂದು ದೇವಾಲಯವನ್ನು ಕಟ್ಟಿದರು.
[9]ಅವರು, 'ನಮಗೆ ಖಡ್ಗ, ಕಾಯಿಲೆ, ಬರ, ಶಿಕ್ಷೆಗಳಿಂದ
ಸಂಕಷ್ಟ ಉಂಟಾದರೆ ನಾವು ನಿನ್ನ ಮತ್ತು ನಿನ್ನ ಆಲಯ
ದೆದುರು ನಿಂತು ನಿನಗೆ ಮೊರೆಯಿಡುವಾಗ ನೀನು ನಮ್ಮ
ಮೊರೆಯನ್ನು ಕೇಳಿ ನಮಗೆ ಸಹಾಯ ಮಾಡುವೆ. ನಿನ್ನ
ಹೆಸರು ಈ ಆಲಯದ ಮೇಲಿದೆ' ಎಂದು ಹೇಳಿದರು.

[10]''ಈಗ ಅಮ್ಮೋನಿಯರೂ ಮೋವಾಬಿನವರೂ
ಸೇಯೀರ್ ಬೆಟ್ಟಪ್ರದೇಶದವರೂ ನಮಗೆ ವಿರೋಧ
ವಾಗಿ ಬಂದಿದ್ದಾರೆ. ಈಜಿಪ್ಟಿನಿಂದ ಇಸ್ರೇಲರು ಹೊರ
ಬಂದಾಗ ಅವರ ದೇಶದೊಳಗಿಂದ ಪ್ರಯಾಣ ಮಾಡಲು
ನೀನು ಬಿಡಲಿಲ್ಲ. ಆದುದರಿಂದ ಇಸ್ರೇಲರು ಅವರನ್ನು
ನಾಶಮಾಡದೆ ಬೇರೆ ಕಡೆಗೆ ತಿರುಗಿದರು. [11]ಅವರನ್ನು
ನಾಶಮಾಡದೆ ಹೋದದ್ದಕ್ಕೆ ಈಗ ಅವರು ಮಾಡು
ತ್ತಿರುವುದನ್ನು ನೀನೇ ನೋಡು. ನೀನು ನಮಗೆ ಕೊಟ್ಟ
ದೇಶದಿಂದ ನಮ್ಮನ್ನು ಹೊರಡಿಸಲು ಬಂದಿದ್ದಾರೆ.
[12]ನಮ್ಮ ದೇವರೇ, ನೀನೇ ಅವರನ್ನು ಶಿಕ್ಷಿಸು. ನಮಗೆ
ವಿರುದ್ಧವಾಗಿ ಬರುತ್ತಿರುವ ಅವರ ದೊಡ್ಡ ಸೈನ್ಯವನ್ನು
ಎದುರಿಸಲು ನಮ್ಮಿಂದಾಗದು. ಏನು ಮಾಡಬೇಕೋ
ನಮಗೆ ತಿಳಿಯುತ್ತಿಲ್ಲ. ನಾವು ನಿನ್ನ ಸಹಾಯವನ್ನೇ
ಎದುರುನೋಡುತ್ತಿದ್ದೇವೆ'' ಎಂದು ಪ್ರಾರ್ಥಿಸಿದನು.

[13]ಯೆಹೂದದ ಎಲ್ಲಾ ಜನರು ತಮ್ಮ ಹೆಂಡತಿ
ಮಕ್ಕಳೊಂದಿಗೆ ಯೆಹೋವನೆದುರು ನಿಂತಿದ್ದರು. [14]ಆಗ
ಜೆಕರ್ಯನ ಮಗನಾದ ಯೆಹಜೀಯೇಲನ ಮೇಲೆ
ಯೆಹೋವನ ಆತ್ಮನು ಬಂದನು. ಜೆಕರ್ಯನು ಬೆನಾ
ಯನ ಮಗ. ಬೆನಾಯನು ಯೆಗೀಯೇಲನ ಮಗ.
ಯೆಗೀಯೇಲನು ಮತ್ತನ್ಯನ ಮಗ. ಯೆಹಜೀಯೇಲನು
ಲೇವಿಯನಾಗಿದ್ದನು ಮತ್ತು ಆಸಾಫನ ಸಂತತಿಯವನಾಗಿ
ದ್ದನು. [15]ಸಭೆಯ ಮಧ್ಯದಲ್ಲಿ ನಿಂತುಕೊಂಡು ಯೆಹಜೀ
ಯೇಲನು ಹೇಳಿದ್ದೇನಂದರೆ, ''ರಾಜನಾದ ಯೆಹೋ
ಷಾಫಾಟನೇ, ನನ್ನ ಮಾತನ್ನು ಕೇಳು. ಜೆರುಸಲೇಮಿ
ನಲ್ಲಿಯೂ ಯೆಹೂದದ ರಾಜ್ಯದಲ್ಲಿಯೂ ವಾಸಿಸುವ
ಸರ್ವಜನರೇ, ನನ್ನ ಮಾತನ್ನು ಕೇಳಿರಿ. ಯೆಹೋವನು
ನಿಮಗೆ ಇಂತೆನ್ನುತ್ತಾನೆ: 'ಆ ದೊಡ್ಡ ಸೈನ್ಯಕ್ಕೆ ಹೆದರಿ ಚಿಂತೆ
ಗೊಳಗಾಗಬೇಡಿ. ಯಾಕಂದರೆ ಯುದ್ಧವು ನಿಮ್ಮದಲ್ಲ,
ಅದು ದೇವರದೇ! [16]ನಾಳೆ ಅವರ ವಿರುದ್ಧವಾಗಿ ಹೊರಟು
ಅವರೊಂದಿಗೆ ಹೋರಾಡಿ. ಅವರು ಹಜ್ಜೀಜ್ ಕಣಿವೆ
ಯಿಂದ ಬರುವರು. ನೀವು ಅವರನ್ನು ಯೆರೂವೇಲ್
ಅರಣ್ಯದ ಮುಂದಿರುವ ಕಣಿವೆಯ ತುದಿಯಲ್ಲಿ ಅವರನ್ನು
ಸಂಧಿಸುವಿರಿ. [17]ನೀವು ಈ ಯುದ್ಧದಲ್ಲಿ ಹೋರಾಡುವ
ಅವಶ್ಯವಿಲ್ಲ. ನಿಮ್ಮ ಸ್ಥಳಗಳಲ್ಲಿ ಸ್ಥಿರವಾಗಿ ನಿಂತುಕೊಂಡಿರಿ.
ಯೆಹೋವನ ರಕ್ಷಣಾ ಕಾರ್ಯವನ್ನು ನೀವು

---

**ಮೆಗೂನ್ಯರು** ಹೀಬ್ರೂವಿನಲ್ಲಿ ''ಅಮ್ಮೋನಿಯರು.''

ನೋಡುವಿರಿ. ಭಯಪಡಬೇಡಿರಿ; ಚಿಂತೆಗೊಳಗಾಗ
ಬೇಡಿರಿ; ಯೆಹೋವನು ನಿಮ್ಮೊಂದಿಗಿದ್ದಾನೆ. ಆದುದ
ರಿಂದ ನೀವು ನಾಳೆ ಹೋಗಿ ಆ ಸೈನ್ಯವನ್ನು ಎದುರಿಸಿರಿ.''
18 ಯೆಹೋಷಾಫಾಟನು ನೆಲದ ಮೇಲೆ ಸಾಷ್ಟಾಂಗ
ನಮಸ್ಕಾರಮಾಡಿದನು. ಹಾಗೆಯೇ ನೆರೆದಿದ್ದ ಜನರೆ
ಲ್ಲರೂ ಯೆಹೋವನ ಮುಂದೆ ಅಡ್ಡಬಿದ್ದು ಆರಾಧಿಸಿ
ದರು. 19 ಕೆಹಾತ್ಯನ ಕುಲದವರಾದ ಲೇವಿಯರೂ ಕೋರ
ಹನ ವಂಶದವರೂ ಎದ್ದುನಿಂತು ಇಸ್ರೇಲ್ ದೇವರಾದ
ಯೆಹೋವನಿಗೆ ಗಟ್ಟಿಯಾದ ಸ್ವರದಿಂದ ಸ್ತುತಿಗೀತೆ
ಹಾಡಿದರು.

20 ಮರುದಿನ ಮುಂಜಾನೆ ಯೆಹೋಷಾಫಾಟನ ಸೈನ್ಯವು
ತೆಕೋವದ ಅರಣ್ಯಕ್ಕೆ ಹೊರಟಿತು. ಅವರು ಹೊರಡುವ
ಮುಂಚೆ ಯೆಹೋಷಾಫಾಟನು ಎದ್ದುನಿಂತು, ''ಜೆರುಸ
ಲೇಮಿನವರೇ, ಯೆಹೂದ ಪ್ರಾಂತ್ಯದವರೇ, ನನ್ನ
ಮಾತನ್ನು ಕೇಳಿರಿ. ನಮ್ಮ ದೇವರಾದ 'ಯೆಹೋವನ
ಮೇಲೆ ಭರವಸವಿಡಿರಿ. ಆಗ ನೀವು ಸ್ಥಿರಗೊಳ್ಳುವಿರಿ.
ಯೆಹೋವನ ಪ್ರವಾದಿಗಳ ಮೇಲೆ ಭರವಸವಿಡಿರಿ; ಆಗ
ನೀವು ಜಯಗಳಿಸುವಿರಿ'' ಎಂದು ಹೇಳಿದನು.
21 ಯೆಹೋಷಾಫಾಟನು ಜನರ ಸಲಹೆಗಳನ್ನು ಕೇಳಿದನು;
ಯೆಹೋವನನ್ನು ಸ್ತುತಿಸಲು ಗಾಯಕರನ್ನು ಆರಿಸಿದನು;
ಯಾಕಂದರೆ ಆತನು ಪರಿಶುದ್ಧನು ಮತ್ತು ಅದ್ಭುತಸ್ವರೂ
ಪನು. ಅವರು ಸೈನ್ಯದ ಮುಂದುಗಡೆಯಲ್ಲಿ ಹೋಗುತ್ತಾ
ಆತನಿಗೆ ಸ್ತುತಿಗೀತೆಯನ್ನು ಹಾಡಿದರು. ಆ ಗಾಯಕರು,
'ಯೆಹೋವನಿಗೆ ಸ್ತೋತ್ರಮಾಡಿರಿ. ಆತನ ಕರುಣೆಯು
ನಿರಂತರವಾದದ್ದು'' ಎಂದು ಹಾಡಿದರು. 22 ಅವರು ಹೀಗೆ
ಸ್ತೋತ್ರ ಮಾಡುತ್ತಿರುವಾಗ ಅಮ್ಮೋನಿಯರ
ಮೇಲೆಯೂ ಮೋವಾಬ್ಯರ ಮೇಲೆಯೂ ಸೇಯೀರ್
ಬೆಟ್ಟಪ್ರದೇಶದವರ ಮೇಲೆಯೂ ಇತರ ವೈರಿಗಳು
ಹಠಾತ್ತನೆ ದಾಳಿ ಮಾಡುವಂತೆ ಯೆಹೋವನು ಮಾಡಿ
ದನು. ಯೆಹೂದವನ್ನು ಆಕ್ರಮಣ ಮಾಡಲು ಬಂದಿದ್ದ
ಅವರೆಲ್ಲರೂ ಸೋತುಹೋದರು. 23 ಅಮ್ಮೋನಿಯರೂ
ಮೋವಾಬ್ಯರೂ ಸೇಯೀರ್ ಬೆಟ್ಟ ಪ್ರದೇಶದವ
ರೊಂದಿಗೆ ಹೋರಾಡಲಾರಂಭಿಸಿ ಅವರನ್ನು ಕೊಂದು
ನಾಶಪಡಿಸಿದರು. ಅವರು ಸೇಯೀರ್ ಬೆಟ್ಟಪ್ರದೇಶದ
ವರನ್ನು ಕೊಂದ ಬಳಿಕ ತಮ್ಮಲ್ಲಿ ತಾವೇ ಒಬ್ಬರನ್ನೊಬ್ಬರು
ಕೊಂದರು.

24 ಯೆಹೂದದ ಸೈನ್ಯದವರು ಅರಣ್ಯದಲ್ಲಿ ಶತ್ರು
ಸೈನ್ಯವನ್ನು ವೀಕ್ಷಿಸುವ ಸ್ಥಳಕ್ಕೆ ಬಂದಾಗ ಸೈನ್ಯವನ್ನು
ಕಾಣದೆ ರಾಶಿಯಾಗಿ ಬಿದ್ದಿದ್ದ ಹೆಣಗಳನ್ನೇ ಕಂಡರು;
ಯಾರೂ ಜೀವದಿಂದುಳಿದಿರಲಿಲ್ಲ. 25 ಯೆಹೋಷಾಫಾ
ಟನೂ ಅವನ ಸೈನಿಕರೂ ಬಂದು ಸತ್ತವರ ದೇಹದಿಂದ
ಬೆಲೆಬಾಳುವ ವಸ್ತುಗಳನ್ನು ಸೂರೆ ಮಾಡಿದರು. ಅವರು
ಅನೇಕ ಪಶುಗಳನ್ನು, ಐಶ್ವರ್ಯವನ್ನು, ಬಟ್ಟೆಬರೆಗಳನ್ನು
ಮತ್ತು ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಂಡರು.
ಯೆಹೋಷಾಫಾಟನು ಮತ್ತು ಅವನ ಜನರು ಹೊತ್ತು
ಕೊಂಡು ಹೋಗಲಾರದಷ್ಟು ವಸ್ತುಗಳಿದ್ದವು; ಅವು
ಗಳನ್ನು ಶೇಖರಿಸಲು ಮೂರು ದಿವಸಗಳು ಬೇಕಾಯಿತು.
26 ನಾಲ್ಕನೆಯ ದಿವಸದಲ್ಲಿ ಯೆಹೋಷಾಫಾಟನೂ ಅವನ
ಸೈನ್ಯವೂ ಬೆರಾಕ ತಗ್ಗಿನಲ್ಲಿ ಬಂದು ಸೇರಿದರು. ಅಲ್ಲಿ
ಯೆಹೋವನಿಗೆ ಸ್ತೋತ್ರ ಮಾಡಿದರು. ಆದುದರಿಂದ ಈ
ದಿನದವರೆಗೂ ಅದಕ್ಕೆ ಬೆರಾಕ* ತಗ್ಗು ಎಂಬ ಹೆಸರಿದೆ.

27 ತರುವಾಯ ಯೆಹೋಷಾಫಾಟನು ತನ್ನ ಸೈನ್ಯವನ್ನು
ಜೆರುಸಲೇಮಿಗೆ ನಡಿಸಿದನು. ಶತ್ರುಗಳ ಮೇಲೆ ಯೆಹೋ
ವನು ನೀಡಿದ ಜಯಕ್ಕಾಗಿ ಅವರು ಹರ್ಷಿಸಿದರು.
25 ಅವರು ವಾದ್ಯಗಳನ್ನು ಬಾರಿಸುತ್ತಾ ದೇವಾಲಯವನ್ನು
ಪ್ರವೇಶಿಸಿದರು. 29 ಯೆಹೋವನು ಇಸ್ರೇಲರ ವೈರಿಗಳಿಗೆ
ವಿರುದ್ಧವಾಗಿ ಯುದ್ಧ ಮಾಡಿದನೆಂದು ಕೇಳಿ ಎಲ್ಲಾ
ದೇಶಗಳವರು ಆತನಿಗೆ ಭಯಪಟ್ಟರು. 30 ಆದುದರಿಂದ
ಯೆಹೋಷಾಫಾಟನ ರಾಜ್ಯದಲ್ಲಿ ಸಮಾಧಾನ ನೆಲೆಸಿತ್ತು.
ಅವನ ಸುತ್ತ ಮುತ್ತಲೂ ಯೆಹೋವನು ಶಾಂತಿಯನ್ನು
ಅನುಗ್ರಹಿಸಿ ದನು.

## ಯೆಹೋಷಾಫಾಟನ ಆಳ್ವಿಕೆಯ ಅಂತ್ಯ

31 ಯೆಹೂದ ದೇಶವನ್ನು ಯೆಹೋಷಾಫಾಟನು ಆಳಿ
ದನು. ಅವನು ಪಟ್ಟವನ್ನೇರಿದಾಗ ಮೂವತ್ತೈದು ವರುಷ
ದವನಾಗಿದ್ದನು. ಅವನು ಜೆರುಸಲೇಮಿನಲ್ಲಿ ಇಪ್ಪತ್ತೈದು
ವರುಷ ಆಳಿದನು. ಅವನ ತಾಯಿಯ ಹೆಸರು ಅಜೂಬ.
ಆಕೆ ಶಿಲ್ಹಿ ಎಂಬಾತನ ಮಗಳು. 32 ಯೆಹೋಷಾಫಾಟನು
ತನ್ನ ತಂದೆ ಆಸನ ಹಾಗೆ ದೇವರ ದೃಷ್ಟಿಯಲ್ಲಿ ಒಳ್ಳೆಯ
ವನಾಗಿ ನಡೆದುಕೊಂಡನು. 33 ಆದರೆ ಅವನು ಉನ್ನತ
ಸ್ಥಳಗಳನ್ನು ನಿರ್ಮೂಲಗೊಳಿಸಲಿಲ್ಲ. ಯೆಹೂದದ
ಜನರು ತಮ್ಮ ಪೂರ್ವಿಕರ ದೇವರಾದ ಯೆಹೋವನ
ಮೇಲೆ ಪೂರ್ಣ ಮನಸ್ಸಿಟ್ಟಿರಲಿಲ್ಲ.

34 ಯೆಹೋಷಾಫಾಟನು ಆರಂಭದಿಂದ ಕೊನೆಯ
ವರೆಗೂ ಮಾಡಿದ ಬೇರೆ ಕಾರ್ಯಗಳು ಹನಾನೀಯನ
ಮಗನಾದ ಯೇಹು ಬರೆದ ಇಸ್ರೇಲ್ ರಾಜರ ಗ್ರಂಥದಲ್ಲಿ
ದಾಖಲಾಗಿವೆ.

35 ಕೆಲಕಾಲದ ನಂತರ ಯೆಹೋಷಾಫಾಟನು ಇಸ್ರೇ
ಲರ ರಾಜನಾಗಿದ್ದ ಅಹಜ್ಯನೊಂದಿಗೆ ಒಪ್ಪಂದವನ್ನು
ಮಾಡಿಕೊಂಡನು. ಅಹಜ್ಯನು ದೇವರ ದೃಷ್ಟಿಯಲ್ಲಿ ಬಹು
ದುಷ್ಟನಾಗಿದ್ದನು. 36 ಯೆಹೋಷಾಫಾಟನು ಅಹಜ್ಯ
ನೊಂದಿಗೆ ಸೇರಿ ಹಡಗುಗಳನ್ನು ತಯಾರಿಸಿ ತಾರ್ಷೀಷಿಗೆ
ಕಳುಹಿಸಿದನು. ಅವರು ಎಚ್ಯೋನ್‌ಗೆಬೆರಿನಲ್ಲಿ ಹಡಗು
ಗಳನ್ನು ಕಟ್ಟಿದರು. 37 ಆಗ ಎಲಿಯೇಜರನು

**ಬೆರಕ** ಅಂದರೆ ಸ್ತುತಿ.

ಯೆಹೋಷಾಫಾಟನ ವಿರುದ್ಧವಾಗಿ ಪ್ರವಾದಿಸಿದನು.
ಅವನು ದೋದಾವಾಹುವಿನ ಮಗನು. ಅವನು ಮಾರೇಶ
ಎಂಬ ಪಟ್ಟಣದವನಾಗಿದ್ದನು. ಅವನು, ‘‘ಯೆಹೋಷಾ
ಫಾಟನೇ, ನೀನು ಅಹಜ್ಯನೊಂದಿಗೆ ಸೇರಿಕೊಂಡಿರುವೆ.
ಇದಕ್ಕಾಗಿ ಯೆಹೋವನು ನಿನ್ನ ಕೆಲಸಗಳನ್ನು ನಾಶ
ಮಾಡುವನು.’’ ಎಂದು ಹೇಳಿದನು. ಅವನ ಹಡಗುಗಳು
ಸಮುದ್ರದಲ್ಲಿ ಒಡೆದು ಹೋದದ್ದರಿಂದ ಅವುಗಳು
ತಾರ್ಷೀಷಿಗೆ ಹೋಗಲಾಗಲಿಲ್ಲ.

21 ಯೆಹೋಷಾಫಾಟನು ಸತ್ತನು. ಅವನನ್ನು
ಅವನ ಪೂರ್ವಿಕರೊಂದಿಗೆ ದಾವೀದನಗರದಲ್ಲಿ
ಸಮಾಧಿಮಾಡಿದರು. ಅವನ ಮಗನಾದ ಯೆಹೋರಾ
ಮನು ಪಟ್ಟಕ್ಕೆ ಬಂದನು. 2ಯೆಹೋರಾಮನ
ತಮ್ಮಂದಿರು ಯಾರೆಂದರೆ: ಅಜರ್ಯ, ಯೆಹೀಯೇಲ್,
ಜೆಕರ್ಯ, ಅಜರ್ಯ ಮೀಕಾಯೇಲ್ ಮತ್ತು ಶೆಫಟ್ಯ.
ಇವರೆಲ್ಲಾ ಯೆಹೂದದ ರಾಜನಾಗಿದ್ದ ಯೆಹೋಷಾಫಾ
ಟನ ಮಕ್ಕಳು. 3ಯೆಹೋಷಾಫಾಟನು ತನ್ನ ಮಕ್ಕಳಿಗೆ
ಅನೇಕ ಬೆಳ್ಳಿಬಂಗಾರದ ಮತ್ತು ಬೆಲೆಬಾಳುವ ವಸ್ತು
ಗಳನ್ನು ಉಡುಗೊರೆಯಾಗಿ ಕೊಟ್ಟನು. ಮಾತ್ರವಲ್ಲದೆ
ಕೋಟೆಯಿಂದ ಭದ್ರಪಡಿಸಲ್ಪಟ್ಟ ಪಟ್ಟಣಗಳನ್ನು
ಕೊಟ್ಟನು. ಆದರೆ ಯೆಹೂದ ರಾಜ್ಯವನ್ನು ತನ್ನ ಚೊಚ್ಚಲ
ಮಗನಾದ ಯೆಹೋರಾಮನಿಗೆ ಕೊಟ್ಟನು.

### ಯೆಹೂದ ರಾಜ್ಯದ ಅರಸನಾದ ಯೆಹೋರಾಮ

4ಯೆಹೋರಾಮನು ತನ್ನ ತಂದೆಯ ರಾಜ್ಯವನ್ನು
ಪಡೆದುಕೊಂಡು ತನ್ನನ್ನು ಬಲಪಡಿಸಿಕೊಂಡನು. ನಂತರ
ತನ್ನ ತಮ್ಮಂದಿರನ್ನೆಲ್ಲಾ ಖಡ್ಗದಿಂದ ಹತಿಸಿದನು. ಮಾತ್ರ
ವಲ್ಲದೆ ಇಸ್ರೇಲಿನ ಕೆಲವು ಪ್ರಧಾನರನ್ನು ಕೊಲ್ಲಿಸಿ
ದನು.5ಅವನು ಮೂವತ್ತೆರಡು ವರ್ಷದವನಾಗಿದ್ದಾಗ
ಆಳಲು ಪ್ರಾರಂಭಿಸಿದನು. ಅವನು ಜೆರುಸಲೇಮಿನಲ್ಲಿ
ಒಟ್ಟು ಎಂಟು ವರ್ಷ ಆಳಿದನು. 6ಅವನು ಇಸ್ರೇಲಿನ
ರಾಜರುಗಳು ವರ್ತಿಸಿದ ರೀತಿಯಲ್ಲಿ ಜೀವಿಸಿದನು.
ಅಹಾಬನ ಕುಟುಂಬದವರು ಹೇಗೆ ಜೀವಿಸಿದರೋ
ಹಾಗೆಯೇ ಜೀವಿಸಿದನು. ಯಾಕಂದರೆ ಅವನು ಅಹಾಬನ
ಮಗಳನ್ನು ಮದುವೆಯಾಗಿದ್ದನು. ಯೆಹೋರಾಮನು
ಯೆಹೋವನ ದೃಷ್ಟಿಯಲ್ಲಿ ಕೆಟ್ಟವನಾಗಿ ಜೀವಿಸಿದನು.
7ಆದರೆ ಯೆಹೋವನು ದಾವೀದನೊಂದಿಗೆ ಮಾಡಿದ
ಒಡಂಬಡಿಕೆಯ ನಿಮಿತ್ತ ಅವನನ್ನು ನಾಶಮಾಡಲಿಲ್ಲ.
ಯೆಹೋವನು, ‘‘ದಾವೀದನ ಸಂತತಿಯವರ ಬೆಳಕು
ಉರಿಯುತ್ತಲೇ ಇರುವದು’’ ಎಂದು ವಾಗ್ದಾನ ಮಾಡಿ
ದ್ದನು. 8ಯೆಹೋರಾಮನ ಆಳ್ವಿಕೆಯ ಸಮಯದಲ್ಲಿ
ಎದೋಮ್ ಯೆಹೂದದ ಹಿಡಿತದಿಂದ ಬಿಡಿಸಿ
ಕೊಂಡಿತು. ಎದೋಮಿನ ಪ್ರಜೆಗಳು ತಮ್ಮ ರಾಜನನ್ನು
ತಾವೇ ಆರಿಸಿಕೊಂಡರು. 9ಇದನ್ನರಿತ ಯೆಹೋರಾಮನು
ತನ್ನ ರಥಬಲದೊಡನೆ ಎದೋಮಿಗೆ ಹೋದನು. ಅಲ್ಲಿ
ಎದೋಮ್ಯರ ಸೈನ್ಯ ಇವರಿಗೆ ಮುತ್ತಿಗೆ ಹಾಕಿತು. ಆದರೆ
ರಾತ್ರಿ ಸಮಯದಲ್ಲಿಯೇ ಯೆಹೋರಾಮನು ಅವರನ್ನು
ಸೋಲಿಸಿದನು. 10ಅಂದಿನಿಂದ ಇಂದಿನ ತನಕವೂ
ಎದೋಮ್ ರಾಜ್ಯವು ಯೆಹೂದರಾಜ್ಯಕ್ಕೆ ಒಳಗಾಗಲೇ
ಇಲ್ಲ. ಲಿಬ್ನ ಪಟ್ಟಣದ ಜನರೂ ಯೆಹೋರಾಮನಿಗೆ
ಎದುರುನಿಂತರು. ತನ್ನ ಪೂರ್ವಿಕರು ಆರಾಧಿಸುತ್ತಿದ್ದ
ದೇವರಾದ ಯೆಹೋವನನ್ನು ಯೆಹೋರಾಮನು
ತೊರೆದು ಬಿಟ್ಟಿದ್ದರಿಂದ ಇವೆಲ್ಲಾ ಅವನಿಗೆ ಸಂಭವಿಸಿದವು.
11ಯೆಹೋರಾಮನು ಯೆಹೂದ ರಾಜ್ಯದ ಬೆಟ್ಟಗಳ
ಮೇಲೆ ಪೂಜಾಸ್ಥಳಗಳನ್ನು ಕಟ್ಟಿಸಿದನು. ಪ್ರಜೆಗಳು
ದೇವರ ಚಿತ್ತಕ್ಕನುಸಾರವಾಗಿ ನಡೆಯದಂತೆ ಅವರನ್ನು
ಯೆಹೋವನಿಂದ ದೂರಕ್ಕೆ ನಡೆಸಿದನು.

12ಪ್ರವಾದಿಯಾದ ಎಲೀಯನು ಯೆಹೋರಾಮನಿಗೆ
ಈ ಸಂದೇಶವನ್ನು ಕಳುಹಿಸಿದನು: ‘‘ನಿನ್ನ ಪೂರ್ವಿಕನಾದ
ದಾವೀದನ ದೇವರಾದ ಯೆಹೋವನ ಮಾತಿದು. ಆತನು
ಹೇಳುವದೇನಂದರೆ, ‘ಯೆಹೋರಾಮನೇ, ನೀನು ನಿನ್ನ
ತಂದೆಯಾದ ಯೆಹೋಷಾಫಾಟನು ಜೀವಿಸಿದ್ದ ರೀತಿ
ಯಲ್ಲಿ ಜೀವಿಸುತ್ತಿಲ್ಲ. ಯೆಹೂದ ದೇಶದ ಅರಸನಾದ
ಆಸನು ಜೀವಿಸಿದ್ದ ರೀತಿಯಲ್ಲಿಯೂ ನೀನು ಜೀವಿ
ಸುತ್ತಿಲ್ಲ.13ಇಸ್ರೇಲರ ರಾಜರುಗಳು ಜೀವಿಸಿದ್ದ ರೀತಿ
ಯಲ್ಲಿ ನೀನು ಜೀವಿಸುತ್ತಿರುವೆ. ಯೆಹೂದ ದೇಶ
ದಲ್ಲಿಯೂ ಜೆರುಸಲೇಮಿನಲ್ಲಿಯೂ ವಾಸಿಸುವ ಜನರು
ನನ್ನ ಚಿತ್ತಕ್ಕನುಸಾರವಾಗಿ ಜೀವಿಸದಂತೆ ನೀನು ಮಾಡು
ತ್ತಿರುವೆ. ಅಹಾಬನೂ ಅವನ ಕುಟುಂಬದವರೂ
ಹೀಗೆಯೇ ಮಾಡಿದರು. ಅವರು ದೇವರಿಗೆ ಅಪನಂಬಿಗಸ್ತ
ರಾಗಿದ್ದರು. ನೀನು ನಿನ್ನ ತಮ್ಮಂದಿರನ್ನು ಕೊಂದುಹಾಕಿದೆ.
ಅವರು ನಿನಗಿಂತಲೂ ಉತ್ತಮರಾಗಿದ್ದರು. 14ಆದ್ದರಿಂದ
ಯೆಹೋವನು ನಿನ್ನ ಜನರನ್ನು ಭಯಂಕರವಾದ ರೋಗ
ದಿಂದ ದಂಡಿಸುವನು. ಆತನು ನಿನ್ನನ್ನೂ ನಿನ್ನ ಹೆಂಡತಿ
ಮಕ್ಕಳನ್ನೂ ಆಸ್ತಿಪಾಸ್ತಿಯನ್ನೂ ಶಿಕ್ಷಿಸುವನು. 15ನಿನ್ನ
ಹೊಟ್ಟೆಯೊಳಗೆ ಭಯಂಕರವಾದ ಕಾಯಿಲೆ ಬರುವದು.
ಆದು ದಿನದಿಂದ ದಿನಕ್ಕೆ ಹೆಚ್ಚುವುದು. ಆ ರೋಗದ
ನಿಮಿತ್ತ ನಿನ್ನ ಕರುಳು ನಿನ್ನ ಹೊಟ್ಟೆಯಿಂದ ಹೊರ
ಬೀಳುವದು.’’

16ಫಿಲಿಷ್ಟಿಯರೂ ಇಥಿಯೋಪಿಯದವರ ಬಳಿಯಲ್ಲಿ
ವಾಸವಾಗಿದ್ದ ಅರಬಿಯರೂ ಯೆಹೋರಾಮನ ಮೇಲೆ
ಕೋಪಗೊಳ್ಳುವಂತೆ ಯೆಹೋವನು ಮಾಡಿದನು.
17ಅವರು ಬಂದು ಯೆಹೂದದೇಶದ ಮೇಲೆ ಆಕ್ರಮಣ
ಮಾಡಿದರು; ರಾಜನಿವಾಸದಲ್ಲಿದ್ದ ನಿಕ್ಷೇಪವನ್ನೆಲ್ಲಾ ಸೂರೆ
ಮಾಡಿದರು. ಅಲ್ಲದೆ ಯೆಹೋರಾಮನ ಪತ್ನಿ ಮಕ್ಕಳನ್ನೂ
ಕೊಂಡೊಯ್ದರು. ಯೆಹೋರಾಮನ ಕೊನೆಯ
ಮಗನು ಮಾತ್ರ ಉಳಿದನು. ಅವನು ಹೆಸರು

ಯೆಹೋವಾಹಾಜ.* [18]ಇದಾದ ಬಳಿಕ ಯೆಹೋವನು
ಅವನ ಕರುಳಿನಲ್ಲಿ ಗುಣವಾಗದ ರೋಗ ಬರ
ಮಾಡಿದನು. [19]ಎರಡು ವರುಷಗಳ ನಂತರ ಆ ರೋಗದ
ನಿಮಿತ್ತ ಅವನ ಕರುಳುಗಳು ಹೊರಬಿದ್ದವು. ಅವನು
ಬಹಳ ನೋವನ್ನು ಅನುಭವಿಸಿ ಸತ್ತನು. ಅವನು ಸತ್ತಾಗ
ಅವನ ತಂಗದೆಗೆ ಧೂಪ ಹಾಕಿ ಗೌರವಿಸಿದಂತೆ ಯೆಹೋ
ರಾಮನಿಗೆ ಮಾಡಲಿಲ್ಲ. [20]ಯೆಹೋರಾಮನು ಪಟ್ಟಕ್ಕೆ
ಬಂದಾಗ ಮೂವ ತ್ತೆರಡು ವರುಷದವನಾಗಿದ್ದನು.
ಅವನು ಎಂಟು ವರ್ಷ ಕಾಲ ಜೆರುಸಲೇಮಿನಲ್ಲಿ ಆಳಿ
ದನು. ಜನರು ಅವನನ್ನು ದಾವೀದ ನಗರದಲ್ಲಿ ಸಮಾಧಿ
ಮಾಡಿದರು. ಆದರೆ ರಾಜರ ಸಮಾಧಿ ಸ್ಥಳದಲ್ಲಿ ಅವನನ್ನು
ಹೂಳಿಡಲಿಲ್ಲ.

### ಯೆಹೂದ ದೇಶದ ಅರಸನಾದ ಅಹಜ್ಯ

22 ಜೆರುಸಲೇಮಿನ ಜನರು ಯೆಹೋರಾಮನ
ಕೊನೆಯ ಮಗನಾದ ಅಹಜ್ಯನನ್ನು ತಮ್ಮ
ರಾಜನನ್ನಾಗಿ ಆರಿಸಿಕೊಂಡರು. ಯೆಹೋರಾಮ
ನೊಂದಿಗೆ ಯುದ್ಧಕ್ಕೆ ಬಂದಿದ್ದ ಅರಬ್ಬಿಯರು ಅವನ
ಮಕ್ಕಳನ್ನೆಲ್ಲಾ ಕೊಂದಿದ್ದರು ಹೀಗಾಗಿ ಉಳಿದುಕೊಂಡಿದ್ದ
ಅಹಜ್ಯನು ಜೆರುಸಲೇಮಿನಲ್ಲಿ ಯೆಹೂದರಾಜ್ಯವನ್ನು
ಆಳತೊಡಗಿದನು. [2]ಆಗ ಅವನಿಗೆ ಇಪ್ಪತ್ತೆರಡು ವರ್ಷ
ಪ್ರಾಯ. ಅವನು ಜೆರುಸಲೇಮಿನಲ್ಲಿ ಒಂದು ವರ್ಷ ಆಳಿ
ದನು. ಅವನ ತಾಯಿ ಒಮ್ರಿಯ ಮಗಳಾದ ಅತಲ್ಯಳು.
[3]ಅಹಾಬನು ಮತ್ತು ಅವನ ಕುಟುಂಬದವರು ಜೀವಿಸಿದ
ಪ್ರಕಾರವೇ ಅಹಜ್ಯನೂ ಜೀವಿಸಿದನು. ದುಷ್ಟಕಾರ್ಯ
ಗಳನ್ನು ಮಾಡಲು ಅವನ ತಾಯಿಯೇ ಅವನನ್ನು
ಪ್ರೋತ್ಸಾಹಿಸಿದಳು. [4]ಯೆಹೋವನ ದೃಷ್ಟಿಯಲ್ಲಿ ಅಹ
ಜ್ಯನು ದುಷ್ಟಕಾರ್ಯಗಳನ್ನು ಮಾಡಿದನು. ಅಹಜ್ಯನ
ತಂದೆಯು ಸತ್ತುಹೋದ ಬಳಿಕ ಅಹಾಬನ ಕುಟುಂಬ
ದವರು ಅಹಜ್ಯನಿಗೆ ಕೆಟ್ಟ ಸಲಹೆಗಳನ್ನು ಕೊಟ್ಟರು. ಆ
ಕೆಟ್ಟ ಸಲಹೆಗಳು ಅವನನ್ನು ಮರಣಕ್ಕೆ ನಡೆಸಿದವು. [5]ಅಹಾ
ಬನ ಕುಟಂಬದವರ ಸಲಹೆಯ ಮೇರೆಗೆ ಅಹಜ್ಯನು
ರಾಜನಾದ ಯೋರಾಮನ ಜೊತೆಯಲ್ಲಿ ಅರಾಮ್ಯರ
ಅರಸನಾದ ಹಜಾಯೇಲನೊಂದಿಗೆ ಯುದ್ಧಮಾಡಲು
ರಾಮೋತ್‌ಗಿಲ್ಯಾದ್ ಎಂಬ ಪಟ್ಟಣಕ್ಕೆ ಹೋದನು.
ಯೋರಾಮನು ಇಸ್ರೇಲರ ಅರಸನಾದ ಅಹಾಬನ
ಮಗನು. ಅರಾಮ್ಯರು ಯುದ್ಧದಲ್ಲಿ ಯೋರಾಮನನ್ನು
ಗಾಯಗೊಳಿಸಿದರು. [6]ಗಾಯವನ್ನು ವಾಸಿಮಾಡಿಸಿ
ಕೊಳ್ಳಲು ಯೋರಾಮನು ಇಜ್ರೇಲಿಗೆ ಹೋದನು. ಅರಾ
ಮ್ಯರ ರಾಜನಾದ ಹಜಾಯೇಲನೊಡನೆ ಯುದ್ಧ ಮಾಡು
ತ್ತಿರುವಾಗ ಯೋರಾಮನು ಗಾಯಗೊಂಡಿದ್ದನು.
ಇಜ್ರೇಲಿನಲ್ಲಿ ಅಸ್ವಸ್ಥನಾಗಿದ್ದ ಯೋರಾಮನನ್ನು
ಸಂಧಿಸಲು ಅಹಜ್ಯನು ಹೋದನು.
[7]ಯೋರಾಮನನ್ನು ಸಂಧಿಸಲು ಹೋದಾಗ ಅಹಜ್ಯನು
ಕೊಲ್ಲಲ್ಪಡುವಂತೆ ಯೆಹೋವನು ಮಾಡಿದನು. ಅಹ
ಜ್ಯನು ಯೇಹುವನ್ನು ಭೇಟಿಯಾಗಲು ಯೋರಾಮ
ನೊಂದಿಗೆ ಹೋದನು. ಯೇಹುವಿನ ತಂದೆ ನಿಂಷಿ.
ಅಹಾಬನ ಕುಟುಂಬವನ್ನು ನಾಶಗೊಳಿಸಲು ಯೆಹೋ
ವನು ಯೇಹುವನ್ನು ಆರಿಸಿಕೊಂಡನು. [8]ಯೇಹುವು
ಅಹಾಬನ ವಂಶದವರನ್ನು ಹತಿಸುತ್ತಿದ್ದಾಗ ಯೆಹೂದದ
ರಾಜನಾದ ಅಹಜ್ಯನ ಕುಟುಂಬದವರನ್ನೂ ಯೆಹೂದದ
ಮುಖಂಡರನ್ನೂ ಅಲ್ಲಿ ಕಂಡನು. ಯೇಹು ಆ ಮುಖಂಡ
ರನ್ನೂ ಅಹಜ್ಯನ ಕುಟುಂಬದವರನ್ನೂ ಕೊಂದನು. [9]ಆ
ಬಳಿಕ ಯೇಹು ಅಹಜ್ಯನಿಗಾಗಿ ಹುಡುಕಿದನು. ಅಹಜ್ಯನು
ಸಮಾರ್ಯದಲ್ಲಿ ಅವಿತುಕೊಂಡಿರುವದನ್ನು ಕಂಡ
ಯೇಹುವಿನ ಸಂಗಡಿಗರು ಅವನನ್ನು ಹಿಡಿದು ಯೇಹು
ವಿನ ಬಳಿಗೆ ತಂದರು. ಅಲ್ಲಿ ಅಹಜ್ಯನನ್ನು ಕೊಂದು ಅವನ
ದೇಹವನ್ನು ಹೂಳಿಟ್ಟರು. ‘‘ಅಹಜ್ಯನು ಯೆಹೋಷಾ
ಫಾಟನ ಸಂತತತಿಯವನಾಗಿದ್ದನು. ಯೆಹೋಷಾ
ಫಾಟನು ತನ್ನ ಪೂರ್ಣಹೃದಯದಿಂದ ಯೆಹೋವನನ್ನು
ಹಿಂಬಾಲಿಸಿದನಲ್ಲವೇ?’’ ಎಂದು ಹೇಳಿದರು. ಯೆಹೂದ
ಸಾಮ್ರಾಜ್ಯವನ್ನು ಒಂದಾಗಿಡಲು ಅಹಜ್ಯನ ಕುಟುಂಬಕ್ಕೆ
ಶಕ್ತಿಯಿರಲಿಲ್ಲ.

### ರಾಣಿ ಅತಲ್ಯ

[10]ಅತಲ್ಯಳು ಅಹಜ್ಯನ ತಾಯಿ. ತನ್ನ ಮಗನು ಸತ್ತನೆಂಬ
ವರ್ತಮಾನ ಸಿಕ್ಕಿದ ಕೂಡಲೇ ಆಕೆ ಯೆಹೂದದಲ್ಲಿದ್ದ
ಎಲ್ಲಾ ರಾಜಕುಮಾರರನ್ನು ಕೊಲ್ಲಿಸಿದಳು. [11]ಆದರೆ
ಅರಸನಾದ ಯೋರಾಮನ ಮಗಳಾದ ಯೆಹೋಷಬ
ತಳು ಅಹಜ್ಯನ ಮಗನಾದ ಯೆಹೋವಾಷನನ್ನು ಅಡಗಿ
ಸಿಟ್ಟಳು. ಆಕೆಯು ಅವನನ್ನೂ ಅವನ ದಾದಿಯನ್ನೂ
ಒಳಗಿನ ಕೋಣೆಯಲ್ಲಿ ಅಡಗಿಸಿಟ್ಟಳು. ಆಕೆಯು ಯಾಜಕ
ನಾದ ಯೆಹೋಯಾದನ ಹೆಂಡತಿಯಾಗಿದ್ದಳು. ಆಕೆಯು
ಸಹ ಅಹಜ್ಯನ ಸೋದರಿ. ಯೆಹೋವಾಷನು ಅತಲ್ಯಳಿಗೆ
ಸಿಗದೆಹೋದುದರಿಂದ ಬದುಕಿಕೊಂಡನು. [12]ಯೆಹೋ
ವಾಷನು ಆರು ವರ್ಷಗಳ ಕಾಲ ಯಾಜಕರೊಂದಿಗೆ
ದೇವಾಲಯದೊಳಗೆ ಯಾರಿಗೂ ತಿಳಿಯದಂತೆ ಇದ್ದನು.
ಆ ದಿನಗಳಲ್ಲಿ ಅತಲ್ಯಳು ರಾಣಿಯಾಗಿ ದೇಶವನ್ನು
ಆಳಿದಳು.

### ಯಾಜಕನಾದ ಯೆಹೋಯಾದ ಮತ್ತು ಅರಸನಾದ ಯೆಹೋವಾಷ

23 ಆರು ವರುಷದ ನಂತರ ಯೆಹೋಯಾದನು
ತನ್ನ ಬಲವನ್ನು ಪ್ರದರ್ಶಿಸಿದನು. ಅವನು ಸೇನಾ
ಪತಿಗಳೊಂದಿಗೆ ಒಪ್ಪಂದ ಮಾಡಿಕೊಂಡನು. ಅವರು

**ಯೆಹೋವಾಹಾಜ್** ಅಹಜ್ಯ ಎಂದು ಸಹ ಕರೆಯುತ್ತಿದ್ದರು.

ಯಾರೆಂದರೆ: ಯೆರೋಹಾಮನ ಮಗನಾದ ಅಜರ್ಯ,
ಯೆಹೋಹಾನಾನನ ಮಗನಾದ ಇಷ್ಮಾಯೇಲ್, ಓಬೇ
ದನ ಮಗನಾದ ಅಜರ್ಯ, ಅದಾಯನ ಮಗನಾದ
ಮಾಸೇಯ ಮತ್ತು ಜಿಕ್ರಿಯ ಮಗನಾದ ಎಲೀಷಾಫಾಟ.
2ಅವರು ಯೆಹೂದ ರಾಜ್ಯದಲ್ಲೆಲ್ಲಾ ಸಂಚರಿಸಿ ಅಲ್ಲಿದ್ದ
ಲೇವಿಯರನ್ನು ಒಟ್ಟಾಗಿ ಸೇರಿಸಿದರು. ಅಲ್ಲದೆ ಗೋತ್ರ
ಪ್ರಧಾನರನ್ನೂ ಒಟ್ಟಾಗಿ ಸೇರಿಸಿ, ಅವರನ್ನು ಜೆರುಸ
ಲೇಮಿಗೆ ಕರೆದುಕೊಂಡು ಬಂದರು. 3ಇವರೆಲ್ಲಾ
ದೇವಾಲಯದಲ್ಲಿ ರಾಜನೊಂದಿಗೆ ಒಪ್ಪಂದವನ್ನು
ಮಾಡಿಕೊಂಡರು.

ಯೆಹೋಯಾದನು ಜನರಿಗೆ, ‘‘ಇಗೋ, ರಾಜ
ಪುತ್ರನು! ಯೆಹೋವನು ದಾವೀದನ ಸಂತತಿಯವರಿಗೆ
ಮಾಡಿದ ವಾಗ್ದಾನದ ಪ್ರಕಾರ ಅರಸನಾಗತಕ್ಕವನು
ಇವನೇ. 4ಈಗ ನೀವು ಮಾಡಬೇಕಾದದ್ದೇನಂದರೆ:
ಸಬ್ಬತ್ ದಿವಸದಲ್ಲಿ ದೇವಾಲಯಕ್ಕೆ ಬರತಕ್ಕ ಯಾಜಕ
ರಲ್ಲೂ ಲೇವಿಯರಲ್ಲೂ ಮೂರರಲ್ಲೊಂದು ಭಾಗವು
ದೇವಾಲಯದ ದ್ವಾರಗಳನ್ನು ಕಾಯಬೇಕು.
5ಇನ್ನೊಂದು ಭಾಗವು ಅರಮನೆಯನ್ನು ಕಾಯಬೇಕು;
ಇತರ ಜನರೆಲ್ಲರೂ ಯೆಹೋವನ ಆಲಯದ ಪ್ರಾಕಾರ
ದಲ್ಲಿರಬೇಕು; 6ಯಾರನ್ನೂ ದೇವಾಲಯದೊಳಕ್ಕೆ ಬಿಡ
ಬಾರದು. ಶುದ್ಧ ಮಾಡಲ್ಪಟ್ಟ ಯಾಜಕರು ಮತ್ತು
ಲೇವಿಯರು ಮಾತ್ರ ದೇವರ ಸೇವೆಮಾಡುವದಕ್ಕಾಗಿ
ಆಲಯದೊಳಗೆ ಬರುವರು. ಉಳಿದವರು ಯೆಹೋ
ವನು ತಮಗೆ ಕೊಟ್ಟ ಕೆಲಸಗಳನ್ನು ಮಾಡಬೇಕು.
7ಲೇವಿಯರು ಅರಸನ ಸುತ್ತಲು ನಿಂತಿರಬೇಕು. ಪ್ರತಿ
ಯೊಬ್ಬರು ತಮ್ಮ ಖಡ್ಗವನ್ನು ಹಿಡಿದವರಾಗಿರಬೇಕು.
ಯಾರಾದರೂ ಆಲಯದೊಳಕ್ಕೆ ಪ್ರವೇಶಿಸಿದರೆ ಅವ
ನನ್ನು ಸಾಯಿಸಿರಿ. ರಾಜನು ಹೋಗುವ ಸ್ಥಳಗಳಲ್ಲಿ ನೀವು
ಅವನೊಂದಿಗೆಯೇ ಇರಬೇಕು.’’

8ಯಾಜಕನಾದ ಯೆಹೋಯಾದನು ಆಜ್ಞಾಪಿಸಿದಂತೆ
ಲೇವಿಯರೂ ಯೆಹೂದದ ಜನರೂ ಮಾಡಿದರು. ಆದ್ದ
ರಿಂದ ಪ್ರತಿಯೊಬ್ಬ ಸೇನಾಧಿಪತಿಯು ತನ್ನ ಕೈ ಕೆಳಗೆ
ಸಬ್ಬತ್‌ದಿನದಲ್ಲಿ ಕೆಲಸ ಮಾಡಲು ಹೋಗುತ್ತಿದ್ದವರನ್ನು
ಮತ್ತು ಸಬ್ಬತ್ ದಿನದ ಕೆಲಸ ಮುಗಿಸಿಕೊಂಡು ಬರುತ್ತಿ
ದ್ದವರನ್ನು ಕೂಡಿಸಿಕೊಂಡನು. 9ಯಾಜಕನಾದ
ಯೆಹೋಯಾದನು ಅವರಿಗೆ ಬರ್ಜಿಯನ್ನೂ ದೊಡ್ಡ
ಮತ್ತು ಚಿಕ್ಕ ಗುರಾಣಿಗಳನ್ನೂ ಕೊಟ್ಟನು. ಅವು ರಾಜ
ನಾದ ದಾವೀದನಿಗೆ ಸೇರಿದವುಗಳಾಗಿದ್ದವು. ಅವು
ದೇವಾಲಯದೊಳಗೆ ಇಡಲ್ಪಟ್ಟಿದ್ದವು.

10ಸೇರಿಬಂದವರು ಎಲ್ಲೆಲ್ಲಿ ನಿಲ್ಲಬೇಕೆಂದು ಯೆಹೋ
ಯಾದನು ಸೂಚಿಸಿದನು. ಪ್ರತಿಯೊಬ್ಬರ ಕೈಯಲ್ಲಿ
ಆಯುಧಗಳಿದ್ದವು. ದೇವಾಲಯದ ಎಡಬಲಗಳಲ್ಲಿ
ಜನರು ನಿಂತಿದ್ದರು. ಯಜ್ಞವೇದಿಕೆಯ ಬಳಿ, ದೇವಾಲ
ಯದ ಬಳಿ ಮತ್ತು ಅರಸನ ಬಳಿಯಲ್ಲಿ ಅವರು ನಿಂತರು.
11ಅವರು ರಾಜಕುಮಾರನನ್ನು ಹೊರತಂದು ಅವನ
ತಲೆಯ ಮೇಲೆ ಕಿರೀಟವನ್ನಿಟ್ಟರು. ಅವನ ಕೈಗೆ ಧರ್ಮ
ಶಾಸ್ತ್ರದ ಪ್ರತಿಯನ್ನು ಕೊಟ್ಟು ಅವನನ್ನು ತಮ್ಮ ರಾಜ
ನನ್ನಾಗಿ ಮಾಡಿದರು. ಯೆಹೋಯಾದನೂ ಅವನ
ಗಂಡು ಮಕ್ಕಳೂ ಯೆಹೋವಾಷನನ್ನು ಅಭಿಷೇಕಿಸಿದರು.
‘‘ಅರಸನು ಚಿರಂಜೀವಿಯಾಗಿರಲಿ’’ ಎಂದು ಹರಸಿದರು.

12ಜನರು ದೇವಾಲಯದಲ್ಲಿ ಅತ್ತಿತ್ತಾ ಓಡಾಡುತ್ತಾ
ರಾಜನನ್ನು ಕೊಂಡಾಡುತ್ತಾ ಇರುವ ಶಬ್ದವನ್ನು ಅತಲ್ಯಳು
ಕೇಳಿ ದೇವಾಲಯದೊಳಕ್ಕೆ ಬಂದಳು. ಅಲ್ಲಿ ಅರಸನು
ನಿಂತದ್ದನ್ನು ಕಂಡಳು. 13ಅವನು ಮುಂಭಾಗದ ಪ್ರವೇಶ
ದ್ವಾರದಲ್ಲಿದ್ದ ರಾಜನ ಸ್ತಂಭದ ಬಳಿ ನಿಂತಿದ್ದನು. ಸೇನಾಧಿ
ಪತಿಗಳೂ ಅವರ ಜನರೂ ತುತ್ತೂರಿಯನ್ನು ಊದಿ
ರಾಜನ ಬಳಿಯಲ್ಲಿಯೇ ನಿಂತಿದ್ದರು. ದೇಶದ ಪ್ರಜೆಗಳು
ಸಂತೋಷದಿಂದ ತುತ್ತೂರಿಯನ್ನೂದಿದರು. ಗಾಯಕರು
ವಾದ್ಯಗಳನ್ನು ಬಾರಿಸುತ್ತಿದ್ದರು. ಅವರು ಜನರನ್ನು
ಸ್ತೋತ್ರ ಗೀತೆಯಲ್ಲಿ ನಡಿಸುತ್ತಿದ್ದರು. ಇದೆಲ್ಲವನ್ನು ಅತ
ಲ್ಯಳು ನೋಡಿ ತನ್ನ ಬಟ್ಟೆಯನ್ನು ಹರಿದು ‘‘ದ್ರೋಹ,
ದ್ರೋಹ’’ ಎಂದು ಕಿರುಚಿದಳು.

14ಯಾಜಕನಾದ ಯೆಹೋಯಾದನು ಸೈನ್ಯಾಧಿಕಾರಿ
ಗಳನ್ನು ಹೊರತಂದು, ‘‘ಅತಲ್ಯಳನ್ನು ಹೊರಗೆ ಎಳೆದು
ಕೊಂಡು ಹೋಗಿ. ಯಾರಾದರೂ ಆಕೆಯನ್ನು ಹಿಂಬಾ
ಲಿಸಿದರೆ ಖಡ್ಗದಿಂದ ಅವರನ್ನು ಸಂಹರಿಸಿರಿ’’ ಎಂದು
ಹೇಳಿದನು. ಆಗ ಯಾಜಕರು ಸಿಪಾಯಿಗಳಿಗೆ, ‘‘ಅತಲ್ಯ
ಳನ್ನು ದೇವಾಲಯದೊಳಗೆ ಕೊಲ್ಲಬೇಡಿ’’ ಎಂದು
ಎಚ್ಚರಿಸಿದರು. 15ಅರಮನೆಗೆ ಹೋಗುವ ದಾರಿಯಲ್ಲಿ
ಕುದುರೆ ಬಾಗಿಲಿನ ಹತ್ತಿರ ಸಿಪಾಯಿಗಳು ಆಕೆಯನ್ನು
ಸಂಹರಿಸಿದರು.

16ಅನಂತರ ಯೆಹೋಯಾದನು ಅರಸನೊಂದಿಗೂ
ನೆರೆದುಬಂದಿದ್ದ ಎಲ್ಲಾ ಜನರೊಂದಿಗೂ ಒಪ್ಪಂದವನ್ನು
ಮಾಡಿಕೊಂಡನು. ಅವರೆಲ್ಲರೂ ಯೆಹೋವನ ಜನರಾಗಿ
ಜೀವಿಸುವದಕ್ಕೆ ಒಪ್ಪಿಕೊಂಡರು. 17ಆಗ ಜನರೆಲ್ಲರು
ಬಾಳನ ಗುಡಿಯೊಳಗೆ ನುಗ್ಗಿ ಅದನ್ನು ಹಾಳು ಮಾಡಿದರು.
ಅದರ ಯಜ್ಞವೇದಿಕೆಗಳನ್ನೂ ವಿಗ್ರಹಗಳನ್ನೂ ಪುಡಿಪುಡಿ
ಮಾಡಿದರು. ಬಾಳನ ಅರ್ಚಕನಾದ ಮತ್ತಾನನನ್ನು
ಬಾಳನ ವೇದಿಕೆಯ ಮುಂದೆಯೇ ಕೊಂದುಹಾಕಿದರು.

18ಆ ಬಳಿಕ ಯೆಹೋಯಾದನು ದೇವಾಲಯದೊಳಗೆ
ಸೇವೆಮಾಡುವ ಜವಾಬ್ದಾರಿಕೆಯನ್ನು ಕೆಲವು ಯಾಜಕರಿಗೆ
ವಹಿಸಿದನು. ಅವರೆಲ್ಲಾ ಲೇವಿಯರಾಗಿದ್ದರು. ದಾವೀ
ದನು ಅವರಿಗೆ ದೇವಾಲಯದ ಜವಾಬ್ದಾರಿಕೆಯನ್ನು
ಕೊಟ್ಟಿದ್ದನು. ಮೋಶೆಯು ಕೊಟ್ಟಿದ್ದ ನಿಯಮಕ್ಕನುಸಾರ
ವಾಗಿ ಅವರು ಸರ್ವಾಂಗಹೋಮವನ್ನು ಅರ್ಪಿಸಿದರು.
ದಾವೀದನು ಆಜ್ಞಾಪಿಸಿದಂತೆ ಅವರು ಹೋಮಗಳನ್ನೂ

ಯಜ್ಞಗಳನ್ನೂ ಅರ್ಪಿಸುವಾಗ ಹಾಡುತ್ತಾ ಸಂತೋಷ
ದಿಂದ ತಮ್ಮ ಕೆಲಸವನ್ನು ಮಾಡಿದರು. [19]ಅಶುದ್ಧ
ರಾದವರು ದೇವಾಲಯದೊಳಗೆ ಪ್ರವೇಶಿಸದಂತೆ
ಯೆಹೋಯಾದನು ದ್ವಾರಪಾಲಕರನ್ನು ನೇಮಿಸಿದನು.

[20]ಯೆಹೋಯಾದನು ಸೇನಾಧಿಪತಿಗಳಿಗೂ ಅಧಿಪತಿ
ಗಳಿಗೂ ಎಲ್ಲಾ ಜನರಿಗೂ ತನ್ನನ್ನು ಹಿಂಬಾಲಿಸುವಂತೆ
ಹೇಳಿ, ಅರಸನನ್ನು ದೇವಾಲಯದೊಳಗಿಂದ ಹೊರ
ತಂದನು. ಅವರೆಲ್ಲಾ ಮೇಲಿನ ಬಾಗಿಲಿನ ಮೂಲಕ
ರಾಜನಿವಾಸಕ್ಕೆ ಹೋದರು. ಅಲ್ಲಿ ರಾಜನನ್ನು ಸಿಂಹಾಸನ
ದಲ್ಲಿ ಕುಳ್ಳಿರಿಸಿದರು. [21]ದೇಶದ ಎಲ್ಲಾ ಜನರು
ಸಂತೋಷಭರಿತರಾದರು. ಅತಲ್ಯಳನ್ನು ಸಾಯಿಸಿದ್ದರಿಂದ
ದೇಶದಲ್ಲಿ ಶಾಂತಿ ನೆಲೆಸಿತು.

### ಯೆಹೋವಾಷನು ದೇವಾಲಯವನ್ನು ತಿರಿಗಿ ಕಟ್ಟಿದ್ದು

24 ಯೆಹೋವಾಷನು ಪಟ್ಟಕ್ಕೆ ಬಂದಾಗ ಏಳು
ವರುಷದವನಾಗಿದ್ದನು. ಅವನು ನಲವತ್ತು
ವರುಷಗಳ ಕಾಲ ಜೆರುಸಲೇಮಿನಲ್ಲಿ ಆಳಿದನು. ಅವನ
ತಾಯಿಯ ಹೆಸರು ಚಿಬ್ಯ. ಆಕೆ ಬೇರ್ಷೆಬದವಳಾಗಿದ್ದಳು.
[2]ಯಾಜಕನಾದ ಯೆಹೋಯಾದನು ಜೀವದಿಂದಿರುವ
ತನಕ ಯೆಹೋವಾಷನು ದೇವರಿಗೆ ಯೋಗ್ಯವಾಗಿ
ನಡೆದುಕೊಂಡನು. [3]ಯೆಹೋಯಾದನು ಅವನಿಗೆ
ಇಬ್ಬರು ಕನ್ನಿಕೆಯರನ್ನು ಮದುವೆ ಮಾಡಿಸಿದನು. ಅವನು
ಗಂಡು ಮತ್ತು ಹೆಣ್ಣು ಮಕ್ಕಳನ್ನು ಪಡೆದನು.

[4]ಸ್ವಲ್ಪಕಾಲವಾದ ಬಳಿಕ ಯೆಹೋವಾಷನು ದೇವಾ
ಲಯವನ್ನು ಸರಿಪಡಿಸಲು ಆಲೋಚಿಸಿದನು. [5]ಅವನು
ಯಾಜಕರನ್ನೂ ಲೇವಿಯರನ್ನೂ ಒಟ್ಟಾಗಿ ಕರೆದು,
‘‘ಯೆಹೂದ ದೇಶದ ಊರುಗಳಿಗೆ ಹೋಗಿ ಜನರು ಪ್ರತಿ
ವರುಷ ದೇವಾಲಯಕ್ಕೆ ಕೊಡಬೇಕಾದ ಹಣವನ್ನು
ಸಂಗ್ರಹಿಸಿರಿ. ದೇವಾಲಯವನ್ನು ಸರಿಪಡಿಸಲು ಆ ಹಣ
ವನ್ನು ಉಪಯೋಗಿಸಿರಿ. ಇದನ್ನು ಬೇಗನೆ ಮಾಡಿರಿ’’
ಎಂದು ಹೇಳಿದನು. ಆದರೆ ಲೇವಿಯರು ಅವಸರ
ಮಾಡಲಿಲ್ಲ.

[6]ಆಗ ಅರಸನಾದ ಯೆಹೋವಾಷನು ಮಹಾಯಾಜಕ
ನಾದ ಯೆಹೋಯಾದನನ್ನು ಕರೆದು ‘‘ದೇವಾಲಯಕ್ಕೆ
ಕೊಡಬೇಕಾದ ಹಣವನ್ನು ಯೆಹೂದ ಮತ್ತು ಜೆರುಸ
ಲೇಮಿನ ಜನರಿಂದ ಲೇವಿಯರು ಸಂಗ್ರಹಿಸಿಕೊಂಡು
ಬರಲು ನೀನೇಕೆ ಅವರನ್ನು ಒತ್ತಾಯಿಸಲಿಲ್ಲ?
ಮೋಶೆಯೂ ಇಸ್ರೇಲರೂ ಆ ಹಣವನ್ನು ಪವಿತ್ರ
ಗುಡಾರಕ್ಕಾಗಿ ಉಪಯೋಗಿಸುತ್ತಿರಲಿಲ್ಲವೇ?’’ ಎಂದು
ಕೇಳಿದನು.

[7]ಗತಿಸಿದ ವರ್ಷಗಳಲ್ಲಿ ಅತಲ್ಯಳ ಮಕ್ಕಳು ದೇವಾ
ಲಯದೊಳಗೆ ಬಲಾತ್ಕಾರದಿಂದ ನುಗ್ಗಿ ಅಲ್ಲಿದ್ದ ಪವಿತ್ರ
ವಸ್ತುಗಳನ್ನು ತೆಗೆದು ಬಾಳ್ ದೇವರ ಪೂಜೆಗಾಗಿ ಉಪ
ಯೋಗಿಸಿದ್ದರು. ಅತಲ್ಯಳು ಬಹಳ ದುಷ್ಟಳಾಗಿದ್ದಳು.

[8]ಅರಸನಾದ ಯೆಹೋವಾಷನು ಒಂದು ಪೆಟ್ಟಿಗೆಯನ್ನು
ಮಾಡಿಸಿ ಅದನ್ನು ದೇವಾಲಯದ ಬಾಗಿಲಲ್ಲಿ ಇರಿಸಿದನು.
[9]ಯೆಹೂದ ಮತ್ತು ಜೆರುಸಲೇಮಿನಲ್ಲಿ ಲೇವಿಯರು
ಜನರಿಗೆಲ್ಲಾ ತಮ್ಮ ತಮ್ಮ ತೆರಿಗೆ ಹಣವನ್ನು ತಂದು
ದೇವರಿಗೆ ಸಮರ್ಪಿಸುವಂತೆ ಪ್ರಕಟಿಸಿದರು. ಇಸ್ರೇಲರು
ಅರಣ್ಯಮಾರ್ಗವಾಗಿ ಪ್ರಯಾಣ ಮಾಡುತ್ತಿರುವಾಗ
ದೇವರ ಸೇವಕನಾದ ಮೋಶೆಯು ಜನರಿಗೆ ಇದನ್ನು
ಆಜ್ಞಾಪಿಸಿದ್ದನು. [10]ಎಲ್ಲಾ ನಾಯಕರೂ ಜನರೂ
ಸಂತೋಷದಿಂದ ತಮ್ಮ ಹಣವನ್ನು ತಂದು ಪೆಟ್ಟಿಗೆಯಲ್ಲಿ
ಹಾಕತೊಡಗಿದರು. ಆ ಪೆಟ್ಟಿಗೆ ತುಂಬಿದ ಮೇಲೆ
[11]ಲೇವಿಯರು ಅದನ್ನು ಅರಸನ ಅಧಿಕಾರಿಗಳ ಬಳಿಗೆ
ತೆಗೆದುಕೊಂಡು ಹೋಗುತ್ತಿದ್ದರು; ರಾಜನ ಕಾರ್ಯ
ದರ್ಶಿ ಮತ್ತು ಯಾಜಕರ ಮುಖಂಡನು ಬಂದು ಅದ
ರಲ್ಲಿದ್ದ ಹಣವನ್ನು ತೆಗೆದುಕೊಂಡು ಮತ್ತೆ ಆ
ಪೆಟ್ಟಿಗೆಯನ್ನು ಮುಂಚಿನ ಸ್ಥಳದಲ್ಲಿ ಇಡುತ್ತಿದ್ದರು. ಹೀಗೆ
ಅವರು ಮಾಡುತ್ತಾ ಬಂದಕಾರಣ ಬಹಳ ಹಣ
ಸಂಗ್ರಹಿಸಲ್ಪಟ್ಟಿತು. [12]ಯೆಹೋಯಾದನು ಮತ್ತು
ರಾಜನು ದೇವಾಲಯವನ್ನು ದುರಸ್ತಿ ಮಾಡುವವರ ಕೈಗೆ
ಅದನ್ನು ಕೊಟ್ಟರು. ಅವರು ಮರದ ಕುಶಲಕರ್ಮಿ
ಗಳನ್ನೂ ಬಡಗಿಗಳನ್ನೂ ದೇವಾಲಯವನ್ನು ಸರಿಪಡಿಸಲು
ನೇಮಿಸಿದರು. ಅಲ್ಲದೆ ತಾಮ್ರ ಕಬ್ಬಿಣಗಳಲ್ಲಿ ಕೆಲಸ
ಮಾಡುವ ಕಾರ್ಮಿಕರನ್ನೂ ಕೆಲಸಕ್ಕೆ ನೇಮಿಸಿದರು.
[13]ಕೆಲಸಗಳ ಮೇಲ್ವಿಚಾರಣೆ ಮಾಡುವವರು ನಂಬಿಗಸ್ತ
ರಾಗಿದ್ದರು. ದೇವಾಲಯವನ್ನು ಸರಿಪಡಿಸುವ ಯೋಜ
ನೆಯು ಪೂರ್ಣಗೊಂಡಿತು. ಅವರು ಅದನ್ನು ಮುಂಚೆ
ಹೇಗಿತ್ತೋ ಹಾಗೆಯೇ ಮಾಡಿದ್ದರು; ಅಲ್ಲದೆ
ಅದಕ್ಕಿಂತಲೂ ಹೆಚ್ಚು ಭದ್ರಪಡಿಸಿದರು. [14]ಕೆಲಸಗಾರರು
ತಮ್ಮ ಕೆಲಸವು ಮುಗಿದ ಬಳಿಕ ಉಳಿದ ಹಣವನ್ನು
ಅರಸನಾದ ಯೆಹೋವಾಷನಿಗೆ ಮತ್ತು ಯೆಹೋ
ಯಾದನಿಗೆ ತಂದುಕೊಟ್ಟರು. ಆ ಹಣವನ್ನು ದೇವಾ
ಲಯದ ಉಪಕರಣಗಳನ್ನು ಮಾಡಿಸಲು ಉಪಯೋಗಿ
ಸಿದರು. ಅವು ದೇವಾಲಯದೊಳಗಿನ ಸೇವೆಗೂ
ಸರ್ವಾಂಗಹೋಮಕ್ಕೂ ಉಪಯುಕ್ತವಾಗಿದ್ದವು. ಮಾತ್ರ
ವಲ್ಲದೆ ಬೆಳ್ಳಿಬಂಗಾರಗಳಿಂದ ಬೋಗುಣಿ ಮತ್ತು ಇತರ
ವಸ್ತುಗಳನ್ನು ಮಾಡಿದರು. ಯೆಹೋಯಾದನು ಜೀವ
ದಿಂದಿರುವ ತನಕ ಪ್ರತೀ ದಿವಸ ಸರ್ವಾಂಗ ಹೋಮ
ವನ್ನರ್ಪಿಸುತ್ತಿದ್ದನು.

[15]ಯೆಹೋಯಾದನು ವೃದ್ಧನಾದನು. ಅವನು ದೀರ್ಘ
ಕಾಲ ಬಾಳಿ ತೀರಿಹೋದನು. ಅವನು ಸಾಯುವಾಗ
ಅವನಿಗೆ ನೂರಮೂವತ್ತು ವರ್ಷವಾಗಿತ್ತು. [16]ಅವನ
ದೇಹವನ್ನು ದಾವೀದನಗರದಲ್ಲಿ ಅರಸುಗಳ ಸಮಾಧಿಯ

ಬಳಿಯಲ್ಲಿ ಸಮಾಧಿಮಾಡಿದರು. ಯಾಕಂದರೆ ಅವನು
ಜೀವಂತನಾಗಿದ್ದಾಗ ಇಸ್ರೇಲಿನ ದೇವರಿಗೂ ಆತನ
ಆಲಯಕ್ಕೂ ಒಳ್ಳೆಯದನ್ನೇ ಮಾಡಿದ್ದನು.
17ಯೆಹೋಯಾದನು ಸತ್ತ ಬಳಿಕ ಯೆಹೂದದೇಶದ
ಪ್ರಮುಖರು ಅರಸನಾದ ಯೆಹೋವಾಷನ ಬಳಿಗೆ
ಬಂದು ನಮಸ್ಕರಿಸಿದರು. ಅರಸನು ಅವರ ಮಾತುಗಳನ್ನು
ಕೇಳಿದನು. 18ಅರಸನೂ ಆ ನಾಯಕರುಗಳೂ ದೇವಾ
ಲಯವನ್ನು ನಿರಾಕರಿಸಿ ಅಶೇರ ಸ್ತಂಭಗಳನ್ನೂ ಇತರ
ವಿಗ್ರಹಗಳನ್ನೂ ಆರಾಧಿಸಿದರು. ಯೆಹೋವನು ಜೆರುಸ
ಲೇಮಿನ ಮತ್ತು ಯೆಹೂದದ ಜನರ ಮೇಲೆ ಕೋಪ
ಗೊಂಡನು. ಯಾಕಂದರೆ ಅರಸನೂ ಆ ನಾಯಕರು
ಗಳೂ ಯೆಹೋವನ ಮುಂದೆ ದೋಷಿಗಳಾಗಿದ್ದರು.
19ಆತನು ಅವರನ್ನು ತನ್ನ ಕಡೆಗೆ ತಿರುಗಿಕೊಳ್ಳುವಂತೆ
ಪ್ರವಾದಿಗಳನ್ನು ಅವರ ಬಳಿಗೆ ಕಳುಹಿಸಿದನು. ಪ್ರವಾದಿ
ಗಳು ಜನರನ್ನು ಎಚ್ಚರಿಸಿದರೂ ಅವರ ಮಾತುಗಳಿಗೆ
ಅವರು ಗಮನಕೊಡಲಿಲ್ಲ.
20ಜೆಕರ್ಯನ ಮೇಲೆ ದೇವರಾತ್ಮನು ಬಂದನು.
ಅವನು ಯಾಜಕನಾದ ಯೆಹೋಯಾದನ ಮಗ.
ಜೆಕರ್ಯನು ಜನರ ಮುಂದೆ ನಿಂತು, ‘‘ಯೆಹೋವನು
ಇಂತೆನ್ನುತ್ತಾನೆ: ‘ಯೆಹೋವನ ಆಜ್ಞೆಗಳಿಗೆ ವಿಧೇಯ
ರಾಗಲು ನೀವು ಏಕೆ ನಿರಾಕರಿಸುತ್ತೀರಿ? ಏತಕ್ಕೆ? ನೀವು
ಉದ್ಧಾರವಾಗುವದಿಲ್ಲ. ನೀವು ಯೆಹೋವನನ್ನು ತೊರೆ
ದದ್ದರಿಂದ ಆತನು ನಿಮ್ಮನ್ನೂ ತೊರೆದು ಬಿಟ್ಟಿರುತ್ತಾನೆ’’
ಎಂದು ಹೇಳಿದನು.
21ಆದರೆ ಅವರು ಜೆಕರ್ಯನ ವಿರೋಧವಾಗಿ
ಒಳಸಂಚುಮಾಡಿದರು. ಅವನನ್ನು ಕೊಲ್ಲಲು ಅರಸನು
ಅವರಿಗೆ ಆಜ್ಞಾಪಿಸಿದನು. ಆಗ ಅವರು ಅವನನ್ನು
ದೇವಾಲಯದ ಅಂಗಳದಲ್ಲಿಯೇ ಕಲ್ಲೆಸೆದು ಕೊಂದರು.
22ಯೆಹೋವಾಷನು ಯೆಹೋಯಾದನ ಉಪಕಾರವನ್ನು
ನೆನಸಲಿಲ್ಲ. ಯೆಹೋಯಾದನು ಜೆಕರ್ಯನ ತಂದೆ.
ಯೆಹೋಯಾದನ ಮಗನನ್ನು ಯೆಹೋವಾಷನು
ಕೊಂದನು. ಜೆಕರ್ಯನು ಸಾಯುವಾಗ, ಹೇಳಿದ್ದೇ
ನಂದರೆ, ‘‘ನೀನು ಮಾಡುತ್ತಿರುವದನ್ನು ಯೆಹೋವನೇ
ನೋಡಿ ನ್ಯಾಯ ತೀರಿಸಲಿ’’ ಎಂದು ಹೇಳಿದನು.
23ಆ ವರ್ಷಾಂತ್ಯದಲ್ಲಿ ಅರಾಮ್ಯರ ಸೈನ್ಯವು ಯೆಹೋ
ವಾಷನಿಗೆ ವಿರುದ್ಧವಾಗಿ ಬಂತು. ಅವರು ಯೆಹೂದ ದೇಶ
ಮತ್ತು ಜೆರುಸಲೇಮಿನ ಮೇಲೆ ದಾಳಿ ಮಾಡಿ ಎಲ್ಲಾ
ನಾಯಕರನ್ನು ಸಂಹರಿಸಿದರು. ಅಲ್ಲಿದ್ದ ಬೆಲೆಬಾಳುವ
ಎಲ್ಲಾ ವಸ್ತುಗಳನ್ನು ದಮಸ್ಕದ ಅರಸನಿಗೆ ಕಳುಹಿಸಿದರು.
24ಅರಾಮ್ಯರ ಸೈನ್ಯವು ಸ್ವಲ್ಪ ಮಂದಿಯಿಂದ ಕೂಡಿದ್ದರೂ
ಯೆಹೂದದ ದೊಡ್ಡ ಸೈನ್ಯವನ್ನು ಸೋಲಿಸಿಬಿಟ್ಟಿತು.
ಯೆಹೂದ್ಯರು ತಮ್ಮ ಪೂರ್ವಿಕರ ದೇವರಾದ ಯೆಹೋ
ವನನ್ನು ತೊರೆದುದರಿಂದ ದೇವರಾದ ಯೆಹೋವನು
ಹಾಗೆ ಮಾಡಿದನು. ಈ ರೀತಿಯಾಗಿ ಯೆಹೋವಾಷನು
ಶಿಕ್ಷಿಸಲ್ಪಟ್ಟನು. 25ಅರಾಮ್ಯರು ಯೆಹೋವಾಷನನ್ನು
ಬಿಟ್ಟುಹೋಗುವಾಗ ಅವನು ರೋಗದಿಂದ ಬಹಳ
ಅಸ್ವಸ್ಥನಾಗಿದ್ದನು. ಅವನ ಸ್ವಂತ ಸೇವಕರೇ ಅವನಿಗೆ
ವಿರೋಧವಾಗಿ ಸಂಚು ಮಾಡಿದರು. ಯಾಕಂದರೆ
ಅವನು ಯೆಹೋಯಾದನ ಮಗನಾದ ಜೆಕರ್ಯನನ್ನು
ಕೊಂದದ್ದರಿಂದ ಸೇವಕರು ಯೆಹೋವಾಷನನ್ನು ಅವನ
ಮಂಚದ ಮೇಲೆಯೇ ಕೊಂದುಹಾಕಿದರು. ಜನರು
ಅವನನ್ನು ದಾವೀದನಗರದಲ್ಲಿ ಸಮಾಧಿಮಾಡಿದರು.
ಆದರೆ ಅರಸರುಗಳ ಸಮಾಧಿಯಲ್ಲಿ ಹೂಳಿಡಲಿಲ್ಲ.
26ಯೆಹೋವಾಷನನ್ನು ಕೊಲ್ಲಲು ಸಂಚುಮಾಡಿದ
ಸೇವಕರು ಯಾರೆಂದರೆ: ಜಾಬಾದ್ ಮತು
ಯೆಹೋಜಾಬಾದ್, ಜಾಬಾದನ ತಾಯಿಯ ಹೆಸರು
ಶಿಮ್ಗಾತ್. ಈಕೆ ಅಮ್ಮೋನಿಯಳು. ಯೆಹೋಜಾಬಾದನ
ತಾಯಿಯು ಶಿಮ್ರೀತ್ ಎಂಬಾಕೆ, ಈಕೆ ಮೋವಾಬ್ಯಳು.
27ಯೆಹೋವಾಷನ ಮಕ್ಕಳ ಚರಿತ್ರೆ, ಅವನ ವಿರುದ್ಧವಾಗಿ
ಹೇಳಿದ ಪ್ರವಾದನೆಗಳು, ಅವನು ದೇವಾಲಯವನ್ನು
ಸರಿಪಡಿಸಿದ ವಿಷಯಗಳು ರಾಜರ ಗ್ರಂಥದ ವ್ಯಾಖ್ಯಾ
ನದಲ್ಲಿ ಬರೆಯಲ್ಪಟ್ಟಿದೆ. ಯೆಹೋವಾಷನ ನಂತರ
ಅಮಚ್ಯನು ರಾಜನಾದನು. ಅಮಚ್ಯನು ಯೆಹೋವಾಷನ
ಮಗ.

## ಯೆಹೂದದ ಅರಸನಾದ ಅಮಚ್ಯ

25 ಅಮಚ್ಯನು ಪಟ್ಟಕ್ಕೆ ಬಂದಾಗ ಇಪ್ಪತ್ತೈದು
ವರ್ಷದವನಾಗಿದ್ದನು. ಅವನು ಜೆರುಸಲೇಮಿ
ನಲ್ಲಿ ಇಪ್ಪತ್ತೊಂಭತ್ತು ವರ್ಷಗಳ ಕಾಲ ರಾಜ್ಯಭಾರ
ಮಾಡಿದನು. ಅವನ ತಾಯಿಯ ಹೆಸರು ಯೆಹೋವ
ದ್ದಾನ್. ಆಕೆ ಜೆರುಸಲೇಮಿನವಳು. 2ದೇವರ ದೃಷ್ಟಿಯಲ್ಲಿ
ಯೋಗ್ಯವಾದದ್ದನ್ನು ಅಮಚ್ಯನು ಮಾಡಿದರೂ ಹೃದಯ
ಪೂರ್ವಕವಾಗಿ ಮಾಡಲಿಲ್ಲ. 3ಅಮಚ್ಯನು ತನ್ನ ರಾಜ್ಯ
ವನ್ನು ಸ್ಥಿರಪಡಿಸಿಕೊಂಡ ನಂತರ ತನ್ನ ತಂದೆಯನ್ನು
ಕೊಂದ ಸೇವಕರನ್ನು ಕೊಲ್ಲಿಸಿದನು. 4ಆದರೆ ಆ ಸೇವಕರ
ಮಕ್ಕಳನ್ನು ಕೊಲ್ಲಿಸಲಿಲ್ಲ. ಯಾಕಂದರೆ ‘‘ಮೋಶೆಯ
ಧರ್ಮಶಾಸ್ತ್ರದ ಪ್ರಕಾರ, ಮಕ್ಕಳು ಮಾಡಿದ ಪಾಪಕ್ಕಾಗಿ
ಅವರ ತಂದೆತಾಯಿಗಳಿಗೆ ಮರಣಶಿಕ್ಷೆಯನ್ನು ವಿಧಿಸ
ಕೂಡದು; ತಂದೆತಾಯಿಗಳು ಮಾಡಿದ ಪಾಪಕ್ಕಾಗಿ ಅವರ
ಮಕ್ಕಳಿಗೆ ಮರಣಶಿಕ್ಷೆಯನ್ನು ವಿಧಿಸಕೂಡದು. ಪಾಪ
ಮಾಡಿದವರಿಗೇ ಮರಣಶಿಕ್ಷೆ ಯಾಗಬೇಕು’’
5ಅಮಚ್ಯನು ಯೆಹೂದ ಪ್ರಾಂತ್ಯದ ಜನರನ್ನು
ಒಟ್ಟುಗೂಡಿಸಿ ಅವರನ್ನು ಕುಟುಂಬಗಳಿಗನುಸಾರವಾಗಿ
ವಿಭಾಗ ಮಾಡಿದನು. ಈ ಗುಂಪುಗಳಿಗೆ ದಳಪತಿಗಳನ್ನು
ನೇಮಿಸಿದನು. ಇವರು ಯೆಹೂದ ಮತ್ತು ಬೆನ್ಯಾಮೀನ್
ಗೋತ್ರಗಳಲ್ಲಿ ಇಪ್ಪತ್ತು ವರುಷಕ್ಕಿಂತ ಮೇಲ್ಪಟ್ಟವರನ್ನು

ಸೈನಿಕರನ್ನಾಗಿ ಆರಿಸಿದರು. ಒಟ್ಟು ಮೂರು ಲಕ್ಷ ಸೈನಿಕರು
ಬರ್ಜಿ ಗುರಾಣಿಗಳೊಂದಿಗೆ ಯುದ್ಧಮಾಡಲು ನುರಿತ
ರಾಗಿದ್ದರು. [6]ಅಮಚ್ಯನು ಒಂದು ಲಕ್ಷ ಸೈನಿಕರನ್ನು
ಇಸ್ರೇಲಿನಿಂದ ತರಿಸಿಕೊಂಡನು. ಅವರಿಗೆ ಮೂರು
ಮುಕ್ಕಾಲು ಟನ್ ಬೆಳ್ಳಿಯನ್ನು ಸಂಬಳ ರೂಪದಲ್ಲಿ
ಕೊಟ್ಟನು. [7]ಆದರೆ ಒಬ್ಬ ದೇವರ ಮನುಷ್ಯನು ಅಮಚ್ಯನ
ಬಳಿಗೆ ಬಂದು, ''ಅರಸನೇ, ಇಸ್ರೇಲಿನ ಸೈನಿಕರು ನಿನ್ನೊಂ
ದಿಗೆ ಯುದ್ಧಕ್ಕೆ ಹೋಗಲು ಬಿಡಬೇಡ. ಯೆಹೋವನು
ಇಸ್ರೇಲರೊಂದಿಗೂ ಎಫ್ರಾಯೀಮಿನ ಜನರೊಂದಿಗೂ
ಇರಲಿಲ್ಲ. [8]ನೀನು ನಿನ್ನನ್ನು ಬಲಿಷ್ಠನನ್ನಾಗಿ ಮಾಡಿ
ಕೊಂಡಿದ್ದರೂ ನಿನ್ನ ಸೋಲು ಮತ್ತು ನಿನ್ನ ಜಯ ದೇವರ
ಕೈಯಲ್ಲಿವೆ'' ಎಂದು ಹೇಳಿದನು. [9]ಅಮಚ್ಯನು ಆ ದೇವರ
ಮನುಷ್ಯನಿಗೆ, ''ಹಾಗಾದರೆ, ನಾನು ಈಗಾಗಲೇ ಅವರಿಗೆ
ಕೊಟ್ಟಿರುವ ಹಣಕ್ಕೇನು ಮಾಡಲಿ?'' ಎಂದು ಕೇಳಿದನು.
ದೇವರ ಮನುಷ್ಯನು ಉತ್ತರಿಸಿದ್ದೇನಂದರೆ, ''ಯೆಹೋ
ವನ ಬಳಿಯಲ್ಲಿ ಯಾವ ಕೊರತೆಯೂ ಇಲ್ಲ. ನಿನಗೆ
ಅದಕ್ಕಿಂತ ಅಧಿಕವಾಗಿ ಕೊಡಲು ಆತನು ಶಕ್ತನಾಗಿದ್ದಾನೆ''
ಎಂದು ಹೇಳಿದನು.

[10]ಅಮಚ್ಯನು ಇಸ್ರೇಲಿನ ಸೈನಿಕರನ್ನು ಎಫ್ರಾ
ಯೀಮ್‌ಪ್ರಾಂತ್ಯಕ್ಕೆ ಕಳುಹಿಸಿದನು. ಅವರು ಯೆಹೂದದ
ಅರಸನ ಮೇಲೆಯೂ ಜನರ ಮೇಲೆಯೂ ಸಿಟ್ಟುಗೊಂಡು
ಕೋಪದಿಂದಲೇ ತಮ್ಮ ಮನೆಗಳಿಗೆ ಹಿಂತೆರಳಿದರು.

[11]ಅಮಚ್ಯನು ಧೈರ್ಯಗೊಂಡು ತನ್ನ ಸೈನ್ಯವನ್ನು
ಎದೋಮ್ ರಾಜ್ಯದ ಉಪ್ಪಿನ ಕಣಿವೆಗೆ ನಡಿಸಿದನು. ಆ
ಸ್ಥಳದಲ್ಲಿ ಅವನ ಸೈನಿಕರು ಸೇಯೀರಿನ ಹತ್ತು ಸಾವಿರ
ಮಂದಿಯನ್ನು ಕೊಂದರು. [12]ಯೆಹೂದದ ಸೈನಿಕರು
ಸೇಯೀರಿನ ಹತ್ತು ಸಾವಿರ ಮಂದಿಯನ್ನು ಸೆರೆಹಿಡಿದರು.
ಅವರನ್ನು ಒಂದು ಕಡಿದಾದ ಬೆಟ್ಟದ ಬದಿಗೊಯ್ದು
ಅಲ್ಲಿಂದ ಅವರನ್ನು ಕೆಳಕ್ಕೆ ದೂಡಿದರು. ಅವರು ಕೆಳಗೆ
ಬಂಡೆಗೆ ಅಪ್ಪಳಿಸಿದಾಗ ಅವರ ದೇಹಗಳು ಚೂರು ಚೂರಾ
ದವು.

[13]ಅದೇ ಸಮಯದಲ್ಲಿ, ಇಸ್ರೇಲರ ಸೈನ್ಯವು ಯೆಹೂ
ದದ ಕೆಲವು ಪಟ್ಟಣಗಳ ಮೇಲೆ ಧಾಳಿ ಮಾಡಿತು. ಅವರು
ಬೇತ್ಹೋರೋನಿನಿಂದ ಹಿಡಿದು. ಸಮಾರ್ಯದವರೆಗೆ
ಇರುವ ಪಟ್ಟಣಗಳ ಮೇಲೆ ಧಾಳಿ ಮಾಡಿದರು. ಅವರು
ಮೂರು ಸಾವಿರ ಜನರನ್ನು ಕೊಂದು ಬೆಲೆಬಾಳುವ
ವಸ್ತುಗಳನ್ನು ತೆಗೆದುಕೊಂಡರು. ಅಮಚ್ಯನು ತನ್ನೊಂದಿಗೆ
ಯುದ್ಧಕ್ಕೆ ಸೇರಿಸಿಕೊಳ್ಳದೆ ಇದ್ದದರಿಂದ ಆ ಸೈನಿಕರು
ಕೋಪಗೊಂಡಿದ್ದರು.

[14]ಎದೋಮ್ಯರನ್ನು ಸೋಲಿಸಿ ಅಮಚ್ಯನು ಮನೆಗೆ
ಹಿಂದಿರುಗಿ ಬಂದನು. ಸೇಯೀರಿನ ಜನರು ಪೂಜಿಸು
ತ್ತಿದ್ದ ವಿಗ್ರಹಗಳನ್ನು ತನ್ನೊಂದಿಗೆ ತಂದನು. ಅವನು
ಅವುಗಳನ್ನು ಪೂಜಿಸತೊಡಗಿ ಅಡ್ಡಬಿದ್ದು ಧೂಪ
ಹಾಕಿದನು. [15]ಯೆಹೋವನು ಅಮಚ್ಯನ ಮೇಲೆ ಸಿಟ್ಟು
ಗೊಂಡನು. ಅವನ ಬಳಿಗೆ ಒಬ್ಬ ಪ್ರವಾದಿಯನ್ನು ಕಳುಹಿಸಿ
ಅವನಿಗೆ, ''ಅಮಚ್ಯನೇ, ಆ ಜನರು ಪೂಜಿಸುವ ವಿಗ್ರಹ
ಗಳಿಗೇಕೆ ನೀನು ಪೂಜೆ ಮಾಡುವೆ? ತಮ್ಮನ್ನು ಪೂಜಿಸು
ವವರನ್ನು ಆ ದೇವರುಗಳು ನಿನ್ನಿಂದ ಕಾಪಾಡಲಾರದೆ
ಹೋದವು'' ಎಂದು ಹೇಳಿದನು.

[16]ಆ ಪ್ರವಾದಿಯು ಈ ಮಾತುಗಳನ್ನು ಹೇಳಿದಾಗ
ಅಮಚ್ಯನು, ''ನಾವು ನಿನ್ನನ್ನು ಅರಸನ ಸಲಹೆಗಾರನನ್ನಾಗಿ
ಮಾಡಲಿಲ್ಲವಲ್ಲಾ. ಆದುದರಿಂದ ಬಾಯಿಮುಚ್ಚಿ
ಕೊಂಡು ಸುಮ್ಮನಿರು. ಇಲ್ಲದಿದ್ದರೆ ನೀನು ಸಾಯುವೆ''
ಅಂದನು. ಆದರೆ ಅವನು, ''ದೇವರು ನಿನ್ನನ್ನು ನಾಶ
ಮಾಡಲು ನಿರ್ಧರಿಸಿದ್ದಾನೆ; ಯಾಕಂದರೆ ನೀನು ನನ್ನ
ಸಲಹೆಯನ್ನು ಕೇಳದೆ ದುಷ್ಟತನ ಮಾಡುತ್ತಿರುವೆ?''
ಎಂದು ಹೇಳಿದನು.

[17]ಅಮಚ್ಯನು ತನ್ನ ಸಲಹೆಗಾರರೊಂದಿಗೆ ಆಲೋಚನೆ
ನಡಿಸಿದನು. ಬಳಿಕ ಇಸ್ರೇಲರ ಅರಸನಾದ ಯೇಹುವಿನ
ಮೊಮ್ಮಗನಾದ ಯೋವಾಷನಿಗೆ 'ನಾವು ಮುಖಾಮುಖಿ
ಯಾಗಿ ಸಂಧಿಸೋಣ' ಎಂಬ ಸಂದೇಶವನ್ನು ಕಳುಹಿಸಿ
ದನು.

[19]ಯೋವಾಷನು ಇಸ್ರೇಲಿನ ಅರಸನಾಗಿದ್ದನು.
ಅವನು, ''ಲೆಬನೋನಿನ ಒಂದು ಚಿಕ್ಕ ಮುಳ್ಳುಗಿಡವು
ಲೆಬನೋನಿನ ದೇವದಾರುಮರಕ್ಕೆ ಸಂದೇಶವನ್ನು ಕಳುಹಿ
ಸಿತು. ಮುಳ್ಳುಗಿಡವು ಹೀಗೆ ಹೇಳಿತು: 'ನಿನ್ನ ಮಗಳು ನನ್ನ
ಮಗನನ್ನು ಮದುವೆ ಮಾಡಿಕೊಳ್ಳಲಿ.' ಆದರೆ ಒಂದು
ಕಾಡುಮೃಗ ಒಂದು ಮುಳ್ಳುಗಿಡವನ್ನು ತುಳಿದು ನಾಶ
ಮಾಡಿತು. [19]ನೀನು ನಿನ್ನ ಮನಸ್ಸಿನಲ್ಲಿ, 'ನಾನು ಎದೋ
ಮನನ್ನು ಸೋಲಿಸಿದ್ದೇನೆ' ಎಂದು ನೆನಸಿಕೊಂಡಿರ
ಬಹುದು. ನೀನು ತುಂಬಾ ಹೆಮ್ಮೆಯುಳ್ಳವನಾಗಿ ಜಂಬ
ಕೊಚ್ಚಿಕೊಳ್ಳುತ್ತಿರುವೆ. ಆದರೆ ನೀನು ಮನೆಯಲ್ಲಿಯೇ
ಕುಳಿತುಕೊಳ್ಳುವುದು ಒಳ್ಳೆದು, ಸುಮ್ಮನೆ ತೊಂದರೆಗೆ
ಸಿಕ್ಕಿಕೊಳ್ಳಬೇಡ. ನನ್ನೊಂದಿಗೆ ಯುದ್ಧ ಮಾಡಿದರೆ ಇಡೀ
ಯೆಹೂದ ದೇಶವೇ ನಾಶವಾಗುವದು.'' ಎಂದು ಬರೆದು
ಕಳುಹಿಸಿದನು.

[20]ಅಮಚ್ಯನು ಅವನ ಮಾತಿಗೆ ಲಕ್ಷ್ಯಕೊಡಲಿಲ್ಲ. ಇದು
ದೇವರಿಂದಲೇ ಆಯಿತು. ಇಸ್ರೇಲ್ ಯೆಹೂದವನ್ನು
ಸೋಲಿಸಬೇಕೆಂದು ದೇವರ ಇಚ್ಛೆಯಾಗಿತ್ತು. ಯಾಕಂ
ದರೆ ಯೆಹೂದದ ಜನರು ಎದೋಮ್ಯರ ದೇವರುಗಳನ್ನು
ಆರಾಧಿಸುತ್ತಿದ್ದರು. [21]ಹೀಗೆ ಯೆಹೂದದ ಅರಸನಾದ
ಅಮಚ್ಯನು ಇಸ್ರೇಲರ ಅರಸನನ್ನು ಮುಖಾಮುಖಿಯಾಗಿ
ಬೇತ್ಷೆಮೆಷಿನಲ್ಲಿ ಸಂಧಿಸಿದನು. ಬೇತ್ಷೆಮೆಷ್ ಯೆಹೂದ
ರಾಜ್ಯದ ಪಟ್ಟಣ. [22]ಇಸ್ರೇಲ್ ಯೆಹೂದವನ್ನು ಸೋಲಿಸಿ
ಬಿಟ್ಟಿತು. ಯೆಹೂದದ ಸೈನಿಕರೆಲ್ಲಾ ತಮ್ಮ ತಮ್ಮ ಮನೆ
ಗಳಿಗೆ ಓಡಿಹೋದರು. [23]ಯೋವಾಷನು

ಬೇತ್ಷೆಮೆಷಿನಲ್ಲಿ ಅಮಚ್ಯನನ್ನು ಹಿಡಿದು ಜೆರುಸಲೇಮಿಗೆ
ಕೊಂಡೊಯ್ದನು. ಅಮಚ್ಯನ ತಂದೆ ಯೆಹೋವಾಷನು.
ಇವನು ಯೆಹೋವಹಾಜನ ಮಗ. ಯೋವಾಷನು
ಜೆರುಸಲೇಮಿನ ಪೌಳಿ ಗೋಡೆಯಲ್ಲಿ ಆರುನೂರು ಅಡಿ
ಗೋಡೆಯನ್ನು ಅಂದರೆ ಎಫ್ರಾಯೀಮ್ ಬಾಗಿಲಿನಿಂದ
ಹಿಡಿದು ಮೂಲೆಬಾಗಿಲಿನವರೆಗೆ ಗೋಡೆಯನ್ನು ಕೆಡವಿ
ಹಾಕಿದನು. 24ದೇವಾಲಯದೊಳಗೆ ಬೆಳ್ಳಿಬಂಗಾರಗಳು
ಮತ್ತು ಬೆಲೆಯುಳ್ಳ ವಸ್ತುಗಳಿದ್ದವು. ಓಬೇದೆದೋಮನು
ಅವುಗಳ ಮೇಲ್ವಿಚಾರಕನಾಗಿದ್ದನು. ಯೋವಾಷಾನು
ಅವೆಲ್ಲವನ್ನೂ ಅರಮನೆಯಲ್ಲಿದ್ದ ನಿಕ್ಷೇಪವನ್ನೂ ಸೂರೆ
ಮಾಡಿ ಕೆಲಜನರನ್ನು ಸೆರೆಹಿಡಿದು ಎಲ್ಲವನ್ನು ಸಮಾರ್ಯ
ಕ್ಕೊಯ್ದನು.
25ಯೋವಾಷನು ಸತ್ತಮೇಲೆ ಅಮಚ್ಯನು ಹದಿನೈದು
ವರುಷ ಜೀವಿಸಿದನು. ಅಮಚ್ಯನ ತಂದೆಯ ಹೆಸರು
ಯೆಹೋವಾಷ; ಅವನು ಯೆಹೂದದ ಅರಸನಾಗಿದ್ದನು.
26ಅಮಚ್ಯನ ಬೇರೆ ಕಾರ್ಯಗಳು ಅಂದರೆ ಆರಂಭದಿಂದ
ಕೊನೆಯವರೆಗಿನ ಕಾರ್ಯಗಳನ್ನು ಯೆಹೂದದ ಮತ್ತು
ಇಸ್ರೇಲಿನ ರಾಜರ ಗ್ರಂಥದಲ್ಲಿ ಬರೆಯಲಾಗಿದೆ. 27ಅಮ
ಚ್ಯನು ದೇವರಾದ ಯೆಹೋವನನ್ನು ಆರಾಧಿಸುವದನ್ನು
ಬಿಟ್ಟದ್ದಕ್ಕಾಗಿ ಜೆರುಸಲೇಮಿನ ಜನರು ಅವನನ್ನು
ಕೊಲ್ಲಲು ಸಂಚುಮಾಡಿದರು. ಆಗ ಅವನು ಲಾಕೀಷಿಗೆ
ಓಡಿಹೋದನು. ಆದರೆ ಜನರು ಕೆಲವರನ್ನು ಕಳುಹಿಸಿ
ಅಲ್ಲಿಯೇ ಅವನನ್ನು ಕೊಲ್ಲಿಸಿದರು. 28ಅವನ ಶರೀ
ರವನ್ನು ಕುದುರೆಯ ಬೆನ್ನಿನ ಮೇಲೆ ಹೊರಿಸಿ ತಂದು
ಯೆಹೂದದ ನಗರದಲ್ಲಿ ಅವನ ಪೂರ್ವಿಕರ ಬಳಿಯಲ್ಲಿ
ಸಮಾಧಿಮಾಡಿದರು.

### ಯೆಹೂದದ ಅರಸನಾದ ಉಜ್ಜೀಯ

26 ಆ ಬಳಿಕ ಯೆಹೂದದ ಜನರು ಅಮಚ್ಯನ ಮಗ
ನಾದ ಉಜ್ಜೀಯನನ್ನು ತಮ್ಮ ಅರಸನನ್ನಾಗಿ
ಆರಿಸಿಕೊಂಡರು. ಆಗ ಅವನಿಗೆ ಹದಿನಾರು ವರುಷ.
2ಉಜ್ಜೀಯನು ಏಲೋತ್ ಪಟ್ಟಣವನ್ನು ಮತ್ತೆ ಕಟ್ಟಿಸಿ
ಯೆಹೂದ ರಾಜ್ಯಕ್ಕೆ ಸೇರಿಸಿದನು. ಅಮಚ್ಯನು ಸತ್ತಾಗ
ಉಜ್ಜೀಯನು ಅವನನ್ನು ಅವನ ಪೂರ್ವಿಕರ ಬಳಿಯಲ್ಲಿ
ಸಮಾಧಿಮಾಡಿದನು.
3ಉಜ್ಜೀಯನು ಪಟ್ಟಕ್ಕೆ ಬಂದಾಗ ಹದಿನಾರು ವರುಷ
ದನಾಗಿದ್ದನು. ಅವನು ಐವತ್ತೆರಡು ವರುಷ ಕಾಲ ಜೆರುಸ
ಲೇಮಿನಲ್ಲಿ ರಾಜ್ಯಭಾರ ಮಾಡಿದನು. ಅವನ ತಾಯಿಯ
ಹೆಸರು ಯೆಕೊಲ್ಯ. ಆಕೆ ಜೆರುಸಲೇಮಿನವಳು. 4ಉಜ್ಜೀ
ಯನು ತನ್ನ ತಂದೆಯಾದ ಅಮಚ್ಯನಂತೆ ದೇವರ ಮುಂದೆ
ಯೋಗ್ಯನಾಗಿ ನಡೆದುಕೊಂಡನು. 5ಜೆಕರ್ಯನು ಜೀವಿ
ಸುತ್ತಿದ್ದಾಗ ಉಜ್ಜೀಯನು ದೇವರನ್ನು ಅನುಸರಿಸಿದನು.
ಅವನು ಉಜ್ಜೀಯನಿಗೆ ದೇವರಿಗೆ ಹೇಗೆ ಭಯ
ಪಡಬೇಕು, ದೇವರನ್ನು ಹೇಗೆ ಗೌರವಿಸಬೇಕೆಂದು
ಕಲಿಸಿಕೊಟ್ಟನು. ಉಜ್ಜೀಯನು ದೇವರಿಗೆ ವಿಧೇಯನಾಗಿ
ಬಾಳಿದಾಗ ಯೆಹೋವ ದೇವರು ಅವನಿಗೆ ಯಶಸ್ಸನ್ನು
ದಯಪಾಲಿಸಿದನು.
6ಉಜ್ಜೀಯನು ಫಿಲಿಷ್ಟಿಯರೊಂದಿಗೆ ಯುದ್ಧಮಾಡಿ
ಅವರ ಪಟ್ಟಣಗಳಾದ ಗತ್, ಯೆಬ್ನೆ ಮತ್ತು ಅಷ್ಡೋ
ದ್‌ಗಳ ಪೌಳಿಗೋಡೆಗಳನ್ನು ಕೆಡವಿಹಾಕಿದನು. ಅವನು
ಅಷ್ಡೋದಿನ ಮತ್ತು ಇತರ ಫಿಲಿಷ್ಟಿಯರ ಪ್ರಾಂತ್ಯಗಳಲ್ಲಿ
ಪಟ್ಟಣಗಳನ್ನು ಕಟ್ಟಿಸಿದನು. 7ಫಿಲಿಷ್ಟಿಯರೊಂದಿಗೂ
ಗೂರ್‌ಬಾಳಿನಲ್ಲಿ ವಾಸಿಸುತ್ತಿದ್ದ ಅರಬಿಯರೊಂದಿಗೂ
ಹಾಗೂ ಮೆಗೂನ್ಯರೊಡನೆಯೂ ಯುದ್ಧಮಾಡಲು
ದೇವರು ಅವನಿಗೆ ಸಹಾಯ ಮಾಡಿದನು. 8ಅಮ್ಮೋನಿ
ಯರು ಉಜ್ಜೀಯನಿಗೆ ಕಪ್ಪವನ್ನು ತಂದುಕೊಟ್ಟರು.
ಉಜ್ಜೀಯನು ಬಲಿಷ್ಠನಾಗಿದ್ದುದರಿಂದ ಅವನ ಹೆಸರು
ಎಲ್ಲಾ ಕಡೆಗಳಲ್ಲಿ ಈಜಿಪ್ಟಿನ ಮೇರೆಯ ತನಕ ಪ್ರಸಿದ್ಧಿ
ಹೊಂದಿತು.
9ಉಜ್ಜೀಯನು ಜೆರುಸಲೇಮಿನಲ್ಲಿ ಮೂಲೆ ಬಾಗಿಲು,
ತಗ್ಗಿನ ಬಾಗಿಲು ಮತ್ತು ಪೌಳಿಗೋಡೆ ತಿರುಗುವ ಭಾಗ
ಇವುಗಳ ಮೇಲೆ ಬುರುಜುಗಳನ್ನು ಕಟ್ಟಿಸಿದನು.
10ಮರುಭೂಮಿಯಲ್ಲಿಯೂ ಬುರುಜುಗಳನ್ನು ಕಟ್ಟಿಸಿ
ದನು; ಅನೇಕ ಬಾವಿಗಳನ್ನು ತೋಡಿಸಿದನು. ಅವನಿಗೆ
ಬಯಲಿನಲ್ಲಿಯೂ ಬೆಟ್ಟಪ್ರದೇಶಗಳಲ್ಲಿಯೂ ಅಸಂ
ಖ್ಯಾತ ಪಶುಗಳಿದ್ದವು. ಪರ್ವತ ಪ್ರಾಂತ್ಯಗಳಲ್ಲಿ ಮತ್ತು
ಬೇರೆ ಸ್ಥಳಗಳಲ್ಲಿ ಹುಲುಸಾದ ಬೆಳೆಯನ್ನು ಬೆಳೆಯಿಸಿ
ದನು. ಬಯಲುಗಳಲ್ಲಿ ಕೆಲಸ ಮಾಡಲು ಅವನು
ರೈತರನ್ನು ಕೂಲಿಗೆ ನೇಮಿಸಿಕೊಂಡನು; ಬೆಟ್ಟ
ಗಳಲ್ಲಿಯೂ ಕಾರ್ಮೆಲಿನಲ್ಲಿಯೂ ಇದ್ದ ತನ್ನ ದ್ರಾಕ್ಷಿ
ತೋಟಗಳನ್ನು ನೋಡಿಕೊಳ್ಳಲು ಕೆಲಸಗಾರರನ್ನು
ಕೂಲಿಗೆ ತೆಗೆದುಕೊಂಡನು.
11ಉಜ್ಜೀಯನ ಬಳಿ ಒಳ್ಳೆಯ ತರಬೇತಿ ಹೊಂದಿದ
ಸೈನ್ಯವಿತ್ತು. ಕಾರ್ಯದರ್ಶಿಯಾದ ಯೆಗೀಯೇಲ್
ಮತ್ತು ಅಧಿಕಾರಿಯಾದ ಮಾಸೇಯರು ಅವರನ್ನು ಗುಂಪು
ಗುಂಪಾಗಿ ವಿಂಗಡಿಸಿದರು. ಹನನ್ಯನು ರಾಜನ ಅಧಿಕಾರಿ
ಗಳಲ್ಲಿ ಒಬ್ಬನಾಗಿದ್ದನು. 12ಸೈನ್ಯಕ್ಕೆ ಒಟ್ಟು ಎರಡು
ಸಾವಿರದ ಆರುನೂರು ಮಂದಿ ಸೇನಾಪತಿಗಳಿದ್ದರು.
13ಅವರು ಕುಟುಂಬದ ನಾಯಕರಾಗಿದ್ದು ಅವರ
ಅಧೀನದಲ್ಲಿ ಯುದ್ಧವೀರರಾದ ಮೂರು ಲಕ್ಷದ ಏಳು
ಸಾವಿರದ ಐನೂರು ಸೈನಿಕರಿದ್ದರು. ಇವರು ವೈರಿ
ಯೊಂದಿಗೆ ಕಾದಾಡಿ ಅರಸನಿಗೆ ಜಯಗಳಿಸಿದರು.
14ಉಜ್ಜೀಯನು ಸೈನಿಕರಿಗೆ ಗುರಾಣಿ, ಬರ್ಜಿ, ಶಿರಸ್ತ್ರಾಣ,
ಕವಚ, ಬಿಲ್ಲು ಮತ್ತು ಕವಣೆಗೆ ಕಲ್ಲುಗಳನ್ನು ಒದಗಿಸಿದನು.
15ಜೆರುಸಲೇಮಿನಲ್ಲಿ ವಿಜ್ಞಾನಿಗಳು ರೂಪಿಸಿದ ಯಂತ್ರ
ಗಳನ್ನು ಉಜ್ಜೀಯನು ತಯಾರಿಸಿದನು. ಇವುಗಳನ್ನು

ಪೌಳಿಗೋಡೆಯ ಮೇಲೆ ಇರಿಸಿದನು. ಇವು ಬಾಣ
ಗಳನ್ನೂ ದೊಡ್ಡ ಕಲ್ಲುಗಳನ್ನೂ ವೈರಿಗಳ ಮೇಲೆ ಹಾರಿಸ
ಬಲ್ಲವಾಗಿದ್ದವು. ಉಜ್ಜೀಯನು ತುಂಬಾ ಪ್ರಸಿದ್ಧಿ
ಹೊಂದಿದ್ದನು. ಬಹುದೂರದ ತನಕ ಅವನ ಹೆಸರು
ಹಬ್ಬಿತು. ಅವನು ದೇವರ ವಿಶೇಷ ಸಹಾಯ ಪಡೆದು
ಕೊಂಡು ಬಲಿಷ್ಠನಾದನು.

16ಬಲಶಾಲಿಯಾದ ಉಜ್ಜೀಯನಲ್ಲಿ ನಾಶಕರವಾದ
ಗರ್ವವು ಸೇರಿತು. ಅವನು ತನ್ನ ದೇವರಾದ ಯೆಹೋ
ವನಿಗೆ ದ್ರೋಹ ಮಾಡಿದನು. ಅವನು ದೇವಾ
ಲಯದೊಳಗೆ ಧೂಪವೇದಿಕೆಯಲ್ಲಿ ತಾನೇ ಧೂಪವನ್ನು
ಹಾಕಲು ಹೋದನು. 17ಯಾಜಕನಾದ ಅಜರ್ಯನೂ
ಧೈರ್ಯಶಾಲಿಗಳಾದ ಎಂಭತ್ತು ಮಂದಿ ಸೇವೆ ಮಾಡುವ
ಯಾಜಕರೂ ಉಜ್ಜೀಯನಿಗೆ, 18“ಉಜ್ಜೀಯನೇ,
ಯೆಹೋವನಿಗೆ ಧೂಪ ಹಾಕುವದು ನಿನ್ನ ಕೆಲಸವಲ್ಲ.
ನೀನು ಹೀಗೆ ಮಾಡುವದು ಸರಿಯಲ್ಲ. ಆರೋನನ
ಸಂತತಿಯವರಾದ ಯಾಜಕರೇ ಧೂಪ ಹಾಕ
ಬೇಕಾದದ್ದು. ಅವರು ಪವಿತ್ರ ಸೇವೆಗೆ ನೇಮಿಸಲ್ಪಟ್ಟಿ
ದ್ದಾರೆ. ನೀನು ಈ ಮಹಾಪವಿತ್ರಸ್ಥಾನದಿಂದ ಹೊರಗೆ
ಹೋಗು. ನೀನು ದೇವರಾದ ಯೆಹೋವನಿಗೆ ವಿಧೇಯ
ನಾಗಿಲ್ಲ. ಈ ಕಾರ್ಯವನ್ನು ಮಾಡಿದ್ದರಿಂದ ದೇವರು
ನಿನ್ನನ್ನು ಮೆಚ್ಚುವದಿಲ್ಲ” ಎಂದು ಹೇಳಿದರು.

19ಇದನ್ನು ಕೇಳಿ ಉಜ್ಜೀಯನು ಕೋಪಗೊಂಡನು.
ಅವನು ಧೂಪ ಹಾಕಲು ಧೂಪಾರತಿಯನ್ನು ಕೈಯಲ್ಲಿ
ಹಿಡಿದುಕೊಂಡಿದ್ದನು. ಅವನು ಯಾಜಕರ ಮೇಲೆ
ಕೋಪಿಸಿಕೊಂಡಾಗ ಕುಷ್ಠರೋಗವು ಅವನ ಹಣೆಯಲ್ಲಿ
ಕಾಣಿಸಿಕೊಂಡಿತು. ಇದು ಯಾಜಕರ ಮುಂದೆ ದೇವಾ
ಲಯದೊಳಗೆ ಧೂಪವೇದಿಕೆಯ ಬಳಿಯಲ್ಲೇ ಆಯಿತು.
20ಮಹಾಯಾಜಕನಾದ ಅಜರ್ಯನೂ ಇತರ ಯಾಜ
ಕರೂ ಉಜ್ಜೀಯನನ್ನು ನೋಡಿದಾಗ ಅವನ ಹಣೆಯಲ್ಲಿ
ಕುಷ್ಠವು ಕಾಣಿಸಿದ್ದರಿಂದ ಅವನನ್ನು ಕೂಡಲೇ ದೇವಾ
ಲಯದಿಂದ ಹೊರಕ್ಕೆ ಹಾಕಿದರು. ಯೆಹೋವನು
ಅವನನ್ನು ಶಿಕ್ಷಿಸಿದುದರಿಂದ ಉಜ್ಜೀಯನು ತಾನಾಗಿಯೇ
ದೇವಾಲಯದೊಳಗಿಂದ ಅವಸರದಿಂದ ಹೊರ
ಬಂದನು. 21ಅರಸನಾದ ಉಜ್ಜೀಯನು ಕುಷ್ಠರೋಗಿ
ಯಾದುದರಿಂದ ಅವನು ಯೆಹೋವನ ಆಲಯವನ್ನು
ಪ್ರವೇಶಿಸಲಾಗಲಿಲ್ಲ. ಅವನು ದೂರದಲ್ಲಿದ್ದ ಪ್ರತ್ಯೇಕ
ವಾದ ಮನೆಯಲ್ಲಿ ವಾಸಿಸಿದನು. ಅವನ ಮಗನಾದ
ಯೋತಾಮನು ಪ್ರಜಾಪಾಲನೆ ಮಾಡಿದನು.

22ಪ್ರಾರಂಭದಿಂದ ಕೊನೆಯವರೆಗೆ ಉಜ್ಜೀಯನು
ಮಾಡಿದ ಕಾರ್ಯಗಳನ್ನೆಲ್ಲಾ ಆಮೋಚನ ಮಗನೂ
ಪ್ರವಾದಿಯೂ ಆದ ಯೆಶಾಯನು ತನ್ನ ಪುಸ್ತಕದಲ್ಲಿ
ಬರೆದಿರುವನು. 23ಉಜ್ಜೀಯನು ಸತ್ತು ತನ್ನ ಪೂರ್ವಿ
ಕರನ್ನು ಸೇರಿದಾಗ, ಅವನ ಕುಷ್ಠದ ನಿಮಿತ್ತ ಅವನ
ಶವವನ್ನು ರಾಜಕುಟುಂಬ ಸ್ಮಶಾನವಿದ್ದ ಹೊಲದಲ್ಲಿ
ಹೂಳಿಟ್ಟರು. ಉಜ್ಜೀಯನ ಬದಲಾಗಿ ಯೋತಾಮನು
ಅರಸನಾದನು. ಯೋತಾಮನು ಉಜ್ಜೀಯನ ಮಗ.

### ಯೆಹೂದದ ಅರಸನಾದ ಯೋತಾಮ

27 ಯೋತಾಮನು ತನ್ನ ಇಪ್ಪತ್ತೈದನೆಯ ವರ್ಷದಲ್ಲಿ
ಪಟ್ಟಕ್ಕೆ ಬಂದನು. ಅವನು ಜೆರುಸಲೇಮಿನಲ್ಲಿ
ಹದಿನಾರು ವರ್ಷ ಆಳಿದನು. ಇವನ ತಾಯಿ ಚಾದೋಕನ
ಮಗಳಾದ ಯೆರೂಷ. 2ಯೋತಾಮನು ಯೆಹೋವನಿಗೆ
ಮೆಚ್ಚಿಕೆಯಾದ ಕಾರ್ಯಗಳನ್ನು ಮಾಡಿದನು. ತನ್ನ ತಂದೆ
ಯಾದ ಉಜ್ಜೀಯನಂತೆ ಅವನೂ ದೇವರಿಗೆ ವಿಧೇಯ
ನಾಗಿ ನಡೆದುಕೊಂಡನು. ಆದರೆ ತನ್ನ ತಂದೆಯು
ದೇವಾಲಯವನ್ನು ಪ್ರವೇಶಿಸಿ ಧೂಪಹಾಕಿದಂತೆ ಇವನು
ಮಾಡಲಿಲ್ಲ. ಜನರು ಮಾತ್ರ ಕೆಟ್ಟಕಾರ್ಯಗಳಲ್ಲಿಯೇ
ಮುಂದುವರೆದರು. 3ಯೋತಾಮನು ದೇವಾಲಯದ
ಮೇಲಿನ ಬಾಗಿಲನ್ನು ತಿರುಗಿ ಕಟ್ಟಿಸಿದನು. ಪೌಳಿ
ಗೋಡೆಯ ಮೇಲೆ ಓಫೇಲ್ ಎಂಬ ಸ್ಥಳದಲ್ಲಿ ಅನೇಕ
ಕಟ್ಟಡಗಳನ್ನು ಕಟ್ಟಿಸಿದನು. 4ಯೋತಾಮನು ಯೆಹೂ
ದದ ಬೆಟ್ಟಪ್ರದೇಶಗಳಲ್ಲಿ ಪಟ್ಟಣಗಳನ್ನು ಮತ್ತು ಕಾಡಿ
ನೊಳಗೆ ಗೋಪುರಗಳನ್ನು ಕಟ್ಟಿಸಿದನು. 5ಯೋತಾಮನು
ಅಮ್ಮೋನಿಯರ ಸೈನ್ಯದೊಡನೆ ಕಾದಾಡಿ ಜಯಗಳಿಸಿ
ದನು. ಅವರು ಪ್ರತಿ ವರುಷ ಮೂರು ವರುಷಗಳ ಕಾಲ
ಮೂರು ಸಾವಿರದ ನಾನೂರು ಕಿಲೋ.ಗ್ರಾಂ. ತೂಕದ
ಬೆಳ್ಳಿ, ಅರವತ್ತೆರಡು ಸಾವಿರ ಬುಷೆಲ್ ಗೋಧಿಯನ್ನೂ
ಅರವತ್ತೆರಡು ಸಾವಿರ ಬುಷೆಲ್ ಜವೆಗೋಧಿಯನ್ನೂ
ಯೋತಾಮನಿಗೆ ಕಾಣಿಕೆಯಾಗಿ ಕೊಟ್ಟರು.

6ಯೋತಾಮನು ದೇವರಿಗೆ ವಿಧೇಯನಾಗಿ ಜೀವಿಸಿದ್ದ
ಕಾರಣ ಬಲಿಷ್ಠನಾದ ರಾಜನಾದನು. 7ಅವನು ಮಾಡಿದ
ಬೇರೆ ಕಾರ್ಯಗಳು ಮತ್ತು ನಡಿಸಿದ ಯುದ್ಧಗಳ ವಿಷಯ
ಇಸ್ರೇಲರ ಮತ್ತು ಯೆಹೂದದ ರಾಜರ ಗ್ರಂಥದಲ್ಲಿ
ಬರೆಯಲ್ಪಟ್ಟಿದೆ. 8ಯೋತಾಮನು ತನ್ನ ಇಪ್ಪತ್ತೈದನೆಯ
ವರ್ಷದಲ್ಲಿ ಅರಸನಾದನು. ಅವನು ಹದಿನಾರು ವರುಷ
ಜೆರುಸಲೇಮಿನಲ್ಲಿ ಆಳಿದನು. 9ಯೋತಾಮನು ಸತ್ತಾಗ
ಅವನ ಪೂರ್ವಿಕರೊಂದಿಗೆ ಸಮಾಧಿಮಾಡಿದರು. ಅವ
ನನ್ನು ದಾವೀದನಗರದಲ್ಲಿ ಹೂಳಿಟ್ಟರು. ಯೋತಾಮನ
ಮಗನಾದ ಆಹಾಜನು ತನ್ನ ತಂದೆಯ ನಂತರ
ರಾಜನಾದನು.

### ಯೆಹೂದದ ಅರಸನಾದ ಆಹಾಜ

28 ಆಹಾಜನು ಪಟ್ಟಕ್ಕೆ ಬಂದಾಗ ಇಪ್ಪತ್ತು ವರುಷ
ದವನಾಗಿದ್ದನು. ಅವನು ಜೆರುಸಲೇಮಿನಲ್ಲಿದ್ದು
ಹದಿನಾರು ವರುಷ ರಾಜ್ಯಭಾರ ಮಾಡಿದನು. ಆಹಾಜನು
ತನ್ನ ಪೂರ್ವಿಕನಾದ ದಾವೀದನಂತೆ ಸರಿಯಾದ

ರೀತಿಯಲ್ಲಿ ನಡೆದುಕೊಳ್ಳಲಿಲ್ಲ. ದೇವರ ಚಿತ್ತದ ಪ್ರಕಾರ
ಜೀವಿಸಲಿಲ್ಲ. [2]ಅವನು ಇಸ್ರೇಲರ ಅರಸರಂತೆ ಕೆಟ್ಟ
ದಾರಿಯಲ್ಲಿ ನಡೆದನು. ಅವನು ಎರಕದ ಬೊಂಬೆಗಳನ್ನು
ಮಾಡಿಸಿ ಬಾಳ್ ದೇವರ ವಿಗ್ರಹಗಳನ್ನು ಪೂಜಿಸಿದನು.
[3]ಬೆನ್‌ಹಿನ್ನೋಮ್ ಕಣಿವೆಯಲ್ಲಿ ಧೂಪ ಹಾಕಿದನು. ತನ್ನ
ಸ್ವಂತ ಮಕ್ಕಳನ್ನು ಬೆಂಕಿಯಲ್ಲಿ ಸುಟ್ಟು ವಿಗ್ರಹಗಳಿಗೆ
ಆಹುತಿಕೊಟ್ಟನು. ಆ ದೇಶದ ಜನರು ಮಾಡಿದ ಭಯಂ
ಕರ ಪಾಪಗಳನ್ನು ತಾನೂ ಮಾಡಿದನು. ಇಸ್ರೇಲ್ ಜನರು
ಆ ದೇಶವನ್ನು ಪ್ರವೇಶಿಸಿದಾಗ ದೇವರು ಅವರನ್ನು
ಹೊರಗೆ ಹೊರಡಿಸಿದ್ದನು. [4]ಆಹಾಜನು ಬೆಟ್ಟದ ಮೇಲೆ
ಪ್ರತಿಯೊಂದು ಹಸಿರು ಮರದಡಿಯಲ್ಲಿದ್ದ ಉನ್ನತ
ಸ್ಥಳಗಳಲ್ಲಿ ಧೂಪ ಹಾಕಿ ಯಜ್ಞಗಳನ್ನರ್ಪಿಸುತ್ತಿದ್ದನು.

[5-6]ಆಹಾಜನು ಪಾಪಮಾಡಿದ್ದರಿಂದ ದೇವರು ಅರಾ
ಮ್ಯರನ್ನು ಅವನ ವಿರುದ್ಧವಾಗಿ ಕಳುಹಿಸಿ ಅವನು
ಸೋತುಹೋಗುವಂತೆ ಮಾಡಿದನು. ಅವರಲ್ಲಿ ಬಹು
ಮಂದಿ ಸೆರೆಹಿಡಿಯಲ್ಪಟ್ಟರು. ಅರಾಮ್ಯರ ಅರಸನು
ಅವರನ್ನೆಲ್ಲಾ ದಮಸ್ಕಕ್ಕೆ ಒಯ್ದನು. ಇಸ್ರೇಲರ ಅರಸನಾದ
ಪೆಕಹನು ಬಂದು ಆಹಾಜನನ್ನು ಸೋಲಿಸುವಂತೆ
ಯೆಹೋವನು ಮಾಡಿದನು. ಪೆಕಹನ ತಂದೆಯ ಹೆಸರು
ರೆಮಲ್ಯ. ಪೆಕಹನೂ ಅವನ ಸೈನ್ಯವೂ ಯೆಹೂದ ಸೈನಿಕ
ರಲ್ಲಿ ಒಂದೇ ದಿವಸದಲ್ಲಿ ನೂರಿಪ್ಪತ್ತು ಸಾವಿರ ಮಂದಿ
ಧೈರ್ಯಶಾಲಿ ಸೈನಿಕರನ್ನು ಕೊಂದರು. ಯೆಹೂದದ
ಜನರನ್ನು ಪೆಕಹನು ಸೋಲಿಸಿದನು. ಯಾಕಂದರೆ ಅವರ
ಪೂರ್ವಿಕರು ದೇವರಾದ ಯೆಹೋವನಿಗೆ ವಿಧೇಯ
ರಾಗಲು ನಿರಾಕರಿಸಿದರು. [7]ಎಫ್ರಾಯೀಮಿನ ಜಿಕ್ರಿಯು
ಧೈರ್ಯಶಾಲಿಯಾದ ಸಿಪಾಯಿ. ಅವನು ಅರಸನಾದ
ಆಹಾಜನ ಮಗನಾದ ಮಾಸೇಯನನ್ನು, ಅರಮನೆಯ
ಅಧಿಕಾರಿಯಾದ ಅಜ್ರೀಕಾಮನನ್ನು ಮತ್ತು ಅಧಿಕಾರ
ದಲ್ಲಿ ಅರಸನಿಗೆ ಎರಡನೆಯವನಾಗಿದ್ದ ಎಲ್ಕಾನನನ್ನು
ಕೊಂದನು.

[8]ಇಸ್ರೇಲರ ಸೈನ್ಯದವರು ಯೆಹೂದದಲ್ಲಿ ವಾಸಿಸುವ
ಅವರ ಸ್ವಂತ ಕುಟುಂಬದವರಲ್ಲಿ ಎರಡು ಲಕ್ಷ
ಮಂದಿಯನ್ನು ಸೆರೆಹಿಡಿದರು. ಅವರ ಹೆಂಗಸರು, ಮಕ್ಕಳು
ಮತ್ತು ಅಧಿಕವಾದ ಬೆಲೆಬಾಳುವ ವಸ್ತುಗಳನ್ನು ಸೂರೆ
ಮಾಡಿದರು. ಇಸ್ರೇಲರು ಇವರೆಲ್ಲರನ್ನೂ, ಅಮೂಲ್ಯ
ವಸ್ತುಗಳನ್ನೂ ಸಮಾರ್ಯಕ್ಕೆ ತಂದರು. [9]ಆಗ ಯೆಹೋ
ವನ ಪ್ರವಾದಿಯವರಲ್ಲೊಬ್ಬನು ಅಲ್ಲಿದ್ದನು. ಇವನ
ಹೆಸರು ಓದೇದ್. ಓದೇದನು ಇಸ್ರೇಲ್ ಸೈನ್ಯಕ್ಕೆ, ''ನಿಮ್ಮ
ಪೂರ್ವಿಕರ ದೇವರಾದ ಯೆಹೋವನು ಯೆಹೂದದ
ಜನರು ಸೋತು ಹೋಗುವಂತೆ ಮಾಡಿದನು. ಯಾಕಂ
ದರೆ ಆತನು ಅವರ ಮೇಲೆ ಸಿಟ್ಟಿಗೆದ್ದಿದ್ದನು. ನೀವು
ಯೆಹೂದದ ಜನರನ್ನು ನಿಷ್ಕರುಣೆಯಿಂದ ಕೊಂದು
ಹಾಕಿದಿರಿ. ಈಗ ದೇವರು ನಿಮ್ಮ ಮೇಲೆ ಕೋಪ
ಗೊಂಡಿದ್ದಾನೆ. [10]ನೀವು ಯೆಹೂದದ ಮತ್ತು ಜೆರುಸ
ಲೇಮಿನ ಜನರನ್ನು ಗುಲಾಮರನ್ನಾಗಿ ಮಾಡಿಕೊಳ್ಳಲು
ಯೋಚಿಸುತ್ತಿದ್ದೀರಿ. ನೀವು ಕೂಡ ಯೆಹೋವನಿಗೆ
ವಿರೋಧವಾಗಿ ಪಾಪಮಾಡಲಿಲ್ಲವೇ? ಹೀಗೆ ಮಾಡು
ವದರಿಂದ ನೀವು ಸಹ ದೇವರ ದೃಷ್ಟಿಯಲ್ಲಿ ಪಾಪ
ಮಾಡುತ್ತಿದ್ದೀರಿ. [11]ನನ್ನ ಮಾತನ್ನು ಕೇಳಿರಿ, ನೀವು
ಸೆರೆಹಿಡಿದ ನಿಮ್ಮ ಸಹೋದರ ಸಹೋದರಿಯರನ್ನು
ಹಿಂದಕ್ಕೆ ಕಳುಹಿಸಿರಿ. ಯಾಕಂದರೆ ಯೆಹೋವನು ನಿಮ್ಮ
ಮೇಲೆ ಬಹಳವಾಗಿ ಕೋಪಗೊಂಡಿದ್ದಾನೆ'' ಎಂದು
ಹೇಳಿದನು.

[12]ಆಗ ಇಸ್ರೇಲರ ಸೈನಿಕರು ತಮ್ಮ ಮನೆಗೆ ಯುದ್ಧದಿಂದ
ಹಿಂತಿರುಗುವುದನ್ನು ಎಫ್ರಾಯೀಮಿನ ಕೆಲವು ನಾಯ
ಕರು ನೋಡಿದರು. ಆ ನಾಯಕರು ಅವರನ್ನು ಎಚ್ಚರಿಸಿ
ದರು. ಆ ನಾಯಕರುಗಳು ಯಾರೆಂದರೆ: ಯೆಹೋ
ಹಾನಾನನ ಮಗನಾದ ಅಜರ್ಯ, ಮೆಷಿಲ್ಲೇಮೋತನ
ಮಗನಾದ ಬೆರೆಕ್ಯ, ಶಲ್ಲೂಮನ ಮಗನಾದ ಹಿಜ್ಕೀಯ
ಮತ್ತು ಹೆದ್ಲೈಯನ ಮಗನಾದ ಅಮಾಸ. [13]ಈ
ನಾಯಕರುಗಳು ಇಸ್ರೇಲರ ಸೈನಿಕರಿಗೆ ''ಯೆಹೂದ
ದೇಶದಿಂದ ಸೆರೆಯವರನ್ನು ಇಲ್ಲಿಗೆ ತರಬೇಡಿ. ನೀವು
ಹಾಗೆ ಮಾಡಿದರೆ ಅದು ನಿಮ್ಮ ಪಾಪವನ್ನೂ ದೋಷ
ವನ್ನೂ ಮತ್ತಷ್ಟು ಹೆಚ್ಚಿಸುತ್ತದೆ. ಯೆಹೋವನು ಇಸ್ರೇಲರ
ಮೇಲೆ ತುಂಬಾ ಸಿಟ್ಟುಗೊಳ್ಳುವನು'' ಎಂದು ಹೇಳಿದರು.
[14]ಆಗ ಆ ಸೈನಿಕರು ತಮ್ಮ ಬಳಿಯಲ್ಲಿದ್ದ ಸೆರೆಯವರನ್ನು,
ಬೆಲೆಬಾಳುವ ವಸ್ತುಗಳನ್ನು ಆ ನಾಯಕರ ಮತ್ತು
ಇಸ್ರೇಲರ ಕೈಯಲ್ಲಿ ಕೊಟ್ಟುಬಿಟ್ಟರು. [15]ಆ ನಾಯಕರು
ಗಳು ಎದ್ದು ಸೆರೆಯವರಿಗೆ ಸಹಾಯ ಮಾಡಿದರು.
ಇಸ್ರೇಲ್ ಸೈನಿಕರು ಸೂರೆಮಾಡಿದ ಬಟ್ಟೆಬರೆಗಳನ್ನು ಈ
ನಾಯಕರು ಪಡೆದುಕೊಂಡು ಬೆತ್ತಲೆಯಾಗಿದ್ದ ಸೆರೆಯ
ವರಿಗೆ ಕೊಟ್ಟರು. ಅವರಿಗೆ ಕಾಲಿಗೆ ಕೆರಗಳನ್ನು ಕೊಟ್ಟು,
ಊಟೋಪಚಾರಗಳಿಂದ ಸತ್ಕರಿಸಿದರು. ಗಾಯಗೊಂಡ
ವರಿಗೆ ಎಣ್ಣೆ ಹಚ್ಚಿ ಅವರಲ್ಲಿದ್ದ ಬಲಹೀನರನ್ನು ಕತ್ತೆಯ
ಮೇಲೆ ಕುಳ್ಳಿರಿಸಿ ಜೆರಿಕೋವಿನಲ್ಲಿದ್ದ ಅವರವರ
ಮನೆಗಳಿಗೆ ಕರೆದುಕೊಂಡು ಹೋದರು. ಜೆರಿಕೋವಿಗೆ
''ಖರ್ಜೂರ ಮರಗಳ ಊರು'' ಎಂಬ ಹೆಸರಿದೆ.
ಅನಂತರ ಆ ನಾಲ್ಕು ಮಂದಿ ನಾಯಕರು ಸಮಾರ್ಯ
ದಲ್ಲಿದ್ದ ತಮ್ಮ ಮನೆಗೆ ಹೋದರು.

[16-17]ಅದೇ ಸಮಯದಲ್ಲಿ ಎದೋಮ್ಯರು ಬಂದು
ಯೆಹೂದ ಜನರ ಮೇಲೆ ಧಾಳಿಮಾಡಿ ಅವರನ್ನು
ಸೋಲಿಸಿದರು. ಯೆಹೂದ ಜನರನ್ನು ಸೆರೆಹಿಡಿದು ತಮ್ಮ
ದೇಶಕ್ಕೊಯ್ದರು. ಆಗ ಅರಸನಾದ ಆಹಾಜನು ಅಶ್ಶೂ
ರದ ಅರಸನ ಸಹಾಯ ಕೇಳಿದನು. [18]ಫಿಲಿಷ್ಟಿಯರು ಸಹ
ಬೆಟ್ಟಪ್ರದೇಶಗಳ ಮೇಲೆಯೂ ಯೆಹೂದದ ದಕ್ಷಿಣ
ಪ್ರಾಂತ್ಯದಲ್ಲಿದ್ದ ಪಟ್ಟಣಗಳ ಮೇಲೆಯೂ ದಾಳಿ

ಮಾಡಿದರು. ಬೇತ್ಷೆಮೆಷ್, ಅಯ್ಯಾಲೋನ್,
ಗೆದೇರೋತ್, ಸೋಕೋ, ತಿಮ್ನಾ, ಮತ್ತು ಗಿಮ್ಜೋ
ಪಟ್ಟಣಗಳನ್ನು ಅವರು ವಶಪಡಿಸಿಕೊಂಡರು. ಅಲ್ಲದೆ ಆ
ಪಟ್ಟಣಗಳ ಸುತ್ತಮುತ್ತಲಿನ ಊರುಗಳನ್ನೂ ವಶಪಡಿಸಿ
ಕೊಂಡರು. ಫಿಲಿಷ್ಟಿಯರು ಆ ಪಟ್ಟಣಗಳಲ್ಲಿ ವಾಸ ಮಾಡ
ತೊಡಗಿದರು. 19ಅರಸನಾದ ಆಹಾಜನು ತನ್ನ ಜನರನ್ನು
ಪಾಪಮಾಡಲು ಪ್ರೋತ್ಸಾಹಿಸಿದ್ದಕ್ಕಾಗಿ ಯೆಹೋವನು
ಯೆಹೂದ ದೇಶಕ್ಕೆ ಕಷ್ಟವನ್ನು ಕೊಟ್ಟನು. ಆಹಾಜನು
ದೇವರಿಗೆ ದ್ರೋಹಮಾಡಿದನು. 20ಅಶ್ಶೂರದ ಅರಸ
ನಾದ ತಿಗ್ಲತ್ಪಿಲೆಸರನು ಆಹಾಜನಿಗೆ ಸಹಾಯ ಕೊಡುವ
ಬದಲು ಅವನಿಗೇ ಕಷ್ಟಕೊಡಲು ಯೆಹೂದಕ್ಕೆ ಬಂದನು.
21ಆಹಾಜನು ದೇವರ ಆಲಯದಿಂದಲೂ ರಾಜ ನಿವಾಸ
ದಿಂದಲೂ ಮತ್ತು ರಾಜಕುಮಾರರ ಮನೆಯಿಂದಲೂ
ಎಲ್ಲಾ ಬೆಳ್ಳಿಬಂಗಾರಗಳನ್ನು ತೆಗೆದು ಅಶ್ಶೂರದ ಅರಸ
ನಿಗೆ ಕೊಟ್ಟರೂ ಅಶ್ಶೂರದ ಅರಸನು ಆಹಾಜನಿಗೆ
ಸಹಾಯ ಮಾಡದೆ ಹೋದನು.

22ಆಹಾಜನಿಗೆ ಸಂಕಟ ಬಂದಾಗಲೂ ಇನ್ನೂ ಹೆಚ್ಚಾಗಿ
ಪಾಪಮಾಡುತ್ತಾ ಯೆಹೋವನಿಗೆ ಇನ್ನು ಹೆಚ್ಚಾಗಿ
ದ್ರೋಹಿಯಾದನು. 23ದಮಸ್ಕದ ಜನರು ಆರಾಧಿಸುವ
ಆ ದೇವರುಗಳಿಗೆ ಆಹಾಜನು ಯಜ್ಞಗಳನ್ನರ್ಪಿಸಿದನು.
ದಮಸ್ಕದ ಜನರು ಆಹಾಜನನ್ನು ಸೋಲಿಸಿದ್ದರು. ಆಗ
ಆಹಾಜನು, ‘ಅರಾಮ್ಯರು ಪೂಜಿಸುವ ದೇವರು ಅವರಿಗೆ
ಸಹಾಯ ಮಾಡಿದನು. ಆದುದರಿಂದ ನಾನು ಆ ದೇವರಿಗೆ
ಯಜ್ಞವನ್ನರ್ಪಿಸಿ ಆರಾಧಿಸಿದರೆ ಆ ದೇವರು ನನಗೂ
ಸಹಾಯ ಮಾಡುವನು’’ ಎಂದುಕೊಂಡನು. ಆಹಾಜನು
ಆ ದೇವರುಗಳನ್ನು ಪೂಜಿಸುವುದರ ಮೂಲಕ ತಾನೂ
ಪಾಪಮಾಡಿ ತನ್ನ ಪ್ರಜೆಗಳನ್ನೂ ಪಾಪ ಮಾಡುವದಕ್ಕೆ
ಪ್ರೋತ್ಸಾಹಿಸಿದನು.

24ಇದಲ್ಲದೆ ದೇವಾಲಯದಿಂದ ಉಪಕರಣಗಳನ್ನೆಲ್ಲಾ
ಆಹಾಜನು ಹೊರತೆಗೆದು ಅವುಗಳನ್ನು ಒಡೆದು ಚೂರು
ಚೂರು ಮಾಡಿದನು; ದೇವಾಲಯದ ಬಾಗಿಲನ್ನು ಮುಚ್ಚಿ
ಸಿದನು. ಅವನು ವೇದಿಕೆಗಳನ್ನು ಮಾಡಿಸಿ ಜೆರುಸಲೇಮಿನ
ರಸ್ತೆಗಳ ಮೂಲೆ ಮೂಲೆಗಳಲ್ಲಿ ಕಟ್ಟಿಸಿದನು. 25ಯೆಹೂ
ದದ ಪ್ರತಿಯೊಂದು ಪಟ್ಟಣಗಳಲ್ಲಿ ಆಹಾಜನು
ಧೂಪಹಾಕಲು ಮತ್ತು ಬೇರೆ ದೇವರುಗಳನ್ನು
ಪೂಜಿಸಲು ಉನ್ನತ ಸ್ಥಳಗಳನ್ನು ಮಾಡಿಸಿದನು; ಅನ್ಯ
ದೇವರುಗಳಿಗೆ ಧೂಪಹಾಕಲು ಜನರನ್ನು ಪ್ರೋತ್ಸಾ
ಹಿಸಿದನು. ಈ ರೀತಿಯಾಗಿ ತನ್ನ ಪೂರ್ವಿಕರು ಆರಾಧಿಸಿದ
ದೇವರಾದ ಯೆಹೋವನನ್ನು ಆಹಾಜನು ರೇಗಿಸಿದನು.

26ಆರಂಭದಿಂದ ಕೊನೆಯ ತನಕ ಆಹಾಜನು ಮಾಡಿದ
ಇತರ ಕಾರ್ಯಗಳೆಲ್ಲವನ್ನು ಕುರಿತು ಯೆಹೂದದ ಮತ್ತು
ಇಸ್ರೇಲರ ಅರಸರ ಗ್ರಂಥದಲ್ಲಿ ಬರೆದಿರುತ್ತವೆ. 27ಆಹಾ
ಜನು ಸತ್ತಾಗ ಅವನನ್ನು ಪೂರ್ವಿಕರೊಂದಿಗೆ ಜೆರುಸ
ಲೇಮಿನಲ್ಲಿ ಸಮಾಧಿಮಾಡಿದರು; ಅವನನ್ನು ಇಸ್ರೇಲ್
ರಾಜರುಗಳ ಸ್ಮಶಾನದಲ್ಲಿ ಸಮಾಧಿಮಾಡಲಿಲ್ಲ. ಆಹಾ
ಜನ ಬದಲಿಗೆ ಅವನ ಮಗನಾದ ಹಿಜ್ಕೀಯನು ಅರಸ
ನಾದನು.

### ಯೆಹೂದದ ಅರಸನಾದ ಹಿಜ್ಕೀಯ

29 ಹಿಜ್ಕೀಯನು ತನ್ನ ಇಪ್ಪತ್ತೈದನೆಯ ವರ್ಷದಲ್ಲಿ
ಪಟ್ಟಕ್ಕೆ ಬಂದನು. ಅವನು ಜೆರುಸಲೇಮಿನ
ಲ್ಲಿದ್ದುಕೊಂಡು ಇಪ್ಪತ್ತೊಂಭತ್ತು ವರ್ಷ ರಾಜ್ಯಭಾರ
ಮಾಡಿದನು. ಅವನ ತಾಯಿ ಜೆಕರ್ಯನ ಮಗಳಾದ ಅಬೀ
ಯಳು. 2ಹಿಜ್ಕೀಯನು ತನ್ನ ಪೂರ್ವಿಕನಾದ ದಾವೀದ
ನಂತೆ ಯೆಹೋವನಿಗೆ ಸರಿಯಾಗಿ ನಡೆದುಕೊಂಡನು.
ಅವನು ದೇವರ ದೃಷ್ಟಿಯಲ್ಲಿ ಒಳ್ಳೆಯವನಾಗಿ ನಡೆದು
ಕೊಂಡನು.

3ಹಿಜ್ಕೀಯನು ದೇವಾಲಯದ ಬಾಗಿಲುಗಳನ್ನು
ದುರಸ್ತಿಪಡಿಸಿ ಭದ್ರಪಡಿಸಿದನು; ತನ್ನ ಆಳ್ವಿಕೆಯ
ಮೊದಲನೇ ವರ್ಷದ ಮೊದಲಿನ ತಿಂಗಳಿನಲ್ಲಿಯೇ
ದೇವಾಲಯವನ್ನು ಮತ್ತೆ ತೆರೆಯಿಸಿದನು. 4-5ಹಿಜ್ಕೀ
ಯನು ಎಲ್ಲಾ ಯಾಜಕರನ್ನೂ ಲೇವಿಯರನ್ನೂ ಕರೆದು
ದೇವಾಲಯದ ಪೂರ್ವದಿಕ್ಕಿನಲ್ಲಿದ್ದ ಅಂಗಳದಲ್ಲಿ
ಒಟ್ಟುಗೂಡಿಸಿ ಅವರಿಗೆ, ‘‘ನನ್ನ ಮಾತುಗಳನ್ನು ಕೇಳಿರಿ.
ಲೇವಿಯರೇ, ನೀವು ನಿಮ್ಮನ್ನು ಪವಿತ್ರ ಸೇವೆಗೆ ಸಿದ್ಧ
ಮಾಡಿಕೊಳ್ಳಿರಿ. ಯೆಹೋವ ದೇವರ ಆಲಯವನ್ನು
ಪವಿತ್ರ ಸೇವೆಗಾಗಿ ಶುದ್ಧಮಾಡಿರಿ. ನಮ್ಮ ಪೂರ್ವಿಕರು
ಸೇವೆಮಾಡಿದ ದೇವರು ಆತನೇ. ದೇವಾಲಯದೊಳಗೆ
ಇರಬಾರದ ವಸ್ತುಗಳನ್ನು ತೆಗೆದು ಹೊರಗೆ ಹಾಕಿರಿ. ಅವು
ದೇವರ ಆಲಯವನ್ನು ಹೊಲಸು ಮಾಡುತ್ತವೆ. 6ನಮ್ಮ
ಪೂರ್ವಿಕರು ಯೆಹೋವನನ್ನು ತೊರೆದು ಆತನ
ದೃಷ್ಟಿಯಲ್ಲಿ ಪಾಪ ಮಾಡಿದರು; ಆತನ ಆಲಯಕ್ಕೆ
ವಿಮುಖರಾದರು. 7ಅವರು ದೇವಾಲಯದ ಮಂಟಪದ
ಬಾಗಿಲನ್ನು ಮುಚ್ಚಿ ಉರಿಯುತ್ತಿದ್ದ ದೀಪಗಳನ್ನು
ನಂದಿಸಿಬಿಟ್ಟರು. ಇಸ್ರೇಲ್ ದೇವರಾದ ಯೆಹೋವನಿಗೆ
ಪವಿತ್ರ ಸ್ಥಳದಲ್ಲಿ ಧೂಪ ಸುಡುವದನ್ನೂ ಸರ್ವಾಂಗ
ಹೋಮಗಳನ್ನು ಅರ್ಪಿಸುವದನ್ನೂ ನಿಲ್ಲಿಸಿದರು.
8ಆದುದರಿಂದ ಯೆಹೋವನು ಯೆಹೂದದ ಮತ್ತು
ಜೆರುಸಲೇಮಿನ ಜನರ ಮೇಲೆ ಬಹು ಕೋಪಗೊಂಡು
ಅವರನ್ನು ಶಿಕ್ಷಿಸಿದನು. ಯೆಹೋವನು ಯೆಹೂದ ಮತ್ತು
ಜೆರುಸಲೇಮಿನ ಜನರಿಗೆ ಮಾಡಿದ್ದ ಸಂಗತಿಗಳನ್ನು
ನೋಡಿದ ಅನ್ಯರು ಗೇಲಿಮಾಡುತ್ತ ವೈರತ್ವದಿಂದ
ತಲೆಯಾಡಿಸಿದರು. ಇವೆಲ್ಲಾ ಸತ್ಯವೆಂದು ನಿಮಗೆ ತಿಳಿದದೆ.
ಇದನ್ನು ನಿಮ್ಮ ಸ್ವಂತ ಕಣ್ಣುಗಳಿಂದ ನೋಡಿದ್ದೀರಿ. 9ನಮ್ಮ
ಜನರು ರಣರಂಗದಲ್ಲಿ ಕೊಲ್ಲಲ್ಪಟ್ಟರು; ನಮ್ಮ ಹೆಂಡತಿ
ಮಕ್ಕಳು ಸೆರೆಹಿಡಿಯಲ್ಪಟ್ಟರು. 10ಆದ್ದರಿಂದ

ಹಿಜ್ಕೀಯನಾದ ನಾನು ಇಸ್ರೇಲರ ದೇವರಾದ
ಯೆಹೋವನೊಂದಿಗೆ ಒಡಂಬಡಿಕೆ ಮಾಡುತ್ತೇನೆ.
ಆತನು ಇನ್ನು ಮುಂದೆ ನಮ್ಮ ಮೇಲೆ ಸಿಟ್ಟುಗೊಳ್ಳುವು
ದಿಲ್ಲ. 11ಆದುದರಿಂದ ನನ್ನ ಪ್ರಿಯ ಮಕ್ಕಳೇ, ಉದಾಸೀನ
ಮಾಡಬೇಡಿರಿ; ಸಮಯವನ್ನು ಹಾಳು ಮಾಡಬೇಡಿ. ತನ್ನ
ಸೇವೆ ಮಾಡುವದಕ್ಕಾಗಿ ಆತನು ನಿಮ್ಮನ್ನು ಆರಿಸಿರುತ್ತಾನೆ.
ತನ್ನ ಆಲಯದಲ್ಲಿ ಸೇವೆಮಾಡುವುದಕ್ಕೂ ಧೂಪವನ್ನು
ಆತನ ಮುಂದೆ ಸುಡುವದಕ್ಕೂ ನಿಮ್ಮನ್ನು ನೇಮಿಸಿ
ರುತ್ತಾನೆ’’ ಎಂದು ಹೇಳಿದನು.

12-14ದೇವಾಲಯದಲ್ಲಿ ಸೇವೆಮಾಡಲು ಪ್ರಾರಂಭಿಸಿದ
ಲೇವಿಯರ ಪಟ್ಟಿ; ಕೆಹಾತ್ಯನ ಕುಟುಂಬದ ಅಮಾಸೈಯ
ಮಗನಾದ ಮಹತ್ ಮತ್ತು ಅಜರ್ಯನ ಮಗನಾದ
ಯೋವೇಲ್; ಮೆರಾರೀಯ ಸಂತತಿಯಲ್ಲಿ ಅಬ್ದೀಯ
ಮಗನಾದ ಕೀಷ, ಯೆಹಲ್ಲೆಲೇಲನ ಮಗನಾದ
ಅಜರ್ಯ; ಗೆರ್ಷೋನ್ಯನ ಸಂತತಿಯಲ್ಲಿ ಜಿಮ್ಮನ ಮಗ
ನಾದ ಯೋವಾಹ, ಯೋವಾಹನ ಮಗನಾದ ಏದೆನ್;
ಎಲೀಚಾಫಾನ್ಯನ ಸಂತತಿಯಲ್ಲ ಶಿಮ್ರಿ ಮತ್ತು
ಯೆಯೇಲ್; ಆಸಾಫಾನ ಸಂತತಿಯವರಿಂದ ಜೆಕರ್ಯ
ಮತ್ತು ಮತ್ತನ್ಯ; ಹೇಮಾನ್ಯನ ಸಂತತಿಯಿಂದ ಯೆಹೀ
ಯೇಲ್ ಮತ್ತು ಶಿಮ್ಮೀ; ಯೆದೂತೂನ್ಮರ ಸಂತತಿಯಲ್ಲಿ
ಶೆಮಾಯ ಮತ್ತು ಉಜ್ಜೀಯೇಲ್. 15ಈ ಲೇವಿಯರೆಲ್ಲಾ
ಒಟ್ಟಾಗಿ ಸೇರಿ ತಮ್ಮ ಸಹೋದರರೊಂದಿಗೆ ದೇವಾ
ಲಯದ ಪವಿತ್ರ ಸೇವೆಯನ್ನು ಆರಂಭಿಸಲು ಸಿದ್ಧರಾದರು;
ಅರಸನ ಮೂಲಕವಾಗಿ ಬಂದ ದೇವರ ಆಜ್ಞೆಗೆ
ವಿಧೇಯರಾದರು; ದೇವಾಲಯವನ್ನು ಶುದ್ಧೀಕರಿಸಲು
ಪ್ರಾರಂಭಿಸಿದರು. 16ಯಾಜಕರು ದೇವಾಲಯದ ಒಳ
ಬಾಗವನ್ನು ಪ್ರವೇಶಿಸಿ ಶುಚಿಮಾಡಿದರು. ದೇವಾಲಯ
ದೊಳಗೆ ಇದ್ದ ಎಲ್ಲಾ ಹೊಲಸು ವಸ್ತುಗಳನ್ನು
ಹೊರತೆಗೆದರು. ದೇವಾಲಯದ ಅಂಗಳಕ್ಕೆ ತಂದು
ಅಲ್ಲಿಂದ ಕಿದ್ರೋನ್ ಹಳ್ಳಕ್ಕೆ ತೆಗೆದುಕೊಂಡು ಹೋಗಿ
ಬಿಸಾಡಿದರು. 17ಮೊದಲನೆಯ ತಿಂಗಳಿನ ಮೊದಲನೆಯ
ದಿವಸದಲ್ಲಿ ಲೇವಿಯರು ಪವಿತ್ರಸೇವೆಯನ್ನು ಮಾಡಲು
ಸಿದ್ಧರಾದರು. ತಿಂಗಳಿನ ಎಂಟನೆಯ ದಿನದಲ್ಲಿ
ದೇವಾಲಯದ ಮಂಟಪಕ್ಕೆ ಲೇವಿಯರು ಬಂದರು.
ಎಂಟು ದಿನಗಳಲ್ಲಿ ಅವರು ದೇವಾಲಯವನ್ನೆಲ್ಲಾ ಶುಚಿ
ಮಾಡಿದರು. ಮೊದಲನೆಯ ತಿಂಗಳಿನ ಹದಿನಾರನೆಯ
ದಿನದಲ್ಲಿ ಅವರು ಶುಚಿ ಮಾಡುವ ಕಾರ್ಯವನ್ನು
ಮುಗಿಸಿದರು.

18ಅನಂತರ ಅವರು ಅರಸನಾದ ಹಿಜ್ಕೀಯನ ಬಳಿಗೆ
ಹೋಗಿ, ‘‘ಅರಸನಾದ ಹಿಜ್ಕೀಯನೇ, ನಾವು ದೇವಾ
ಲಯವನ್ನು ಶುಚಿ ಮಾಡಿದೆವು. ಯಜ್ಞವೇದಿಕೆಯನ್ನೂ
ದೇವಾಲಯದ ಸಾಮಗ್ರಿಗಳನ್ನೂ ಶುದ್ಧ ಮಾಡಿದೆವು.
ರೊಟ್ಟಿಯನ್ನಿಡುವ ಮೇಜನ್ನು ಶುಚಿ ಮಾಡಿದೆವು.
19ಆಹಾಜನು ಅರಸನಾಗಿದ್ದ ಕಾಲದಲ್ಲಿ ಅವನು ದೇವರಿಗೆ
ವಿರುದ್ಧವಾಗಿ ಎದ್ದನು. ದೇವಾಲಯದೊಳಗಿದ್ದ ಅನೇಕ
ವಸ್ತುಗಳನ್ನು ಎತ್ತಿ ಬಿಸಾಡಿದನು. ಆದರೆ ನಾವು ಅವು
ಗಳನ್ನೆಲ್ಲಾ ಮತ್ತೆ ಯಥಾಸ್ಥಾನದಲ್ಲಿರಿಸಿ ಅದರ ವಿಶೇಷ
ಉಪಯೋಗಕ್ಕಾಗಿ ಸಿದ್ಧಪಡಿಸಿದೆವು. ಈಗ ಅವು
ಯೆಹೋವನ ವೇದಿಕೆಯ ಮುಂದೆ ಇಡಲ್ಪಟ್ಟಿವೆ.’’

20ಹಿಜ್ಕೀಯ ಅರಸನು ಪಟ್ಟಣದ ಅಧಿಕಾರಿಗಳನ್ನು
ಮುಂಜಾನೆ ಕರೆಯಿಸಿ ಅವರೊಡನೆ ಯೆಹೋವನ
ಆಲಯಕ್ಕೆ ಹೋದನು. 21ಅವರು ಏಳು ಹೋರಿಗಳನ್ನೂ
ಏಳು ಟಗರುಗಳನ್ನೂ ಏಳು ಕುರಿಮರಿಗಳನ್ನೂ ಏಳು
ಆಡುಗಳನ್ನೂ ತಂದರು. ಈ ಪ್ರಾಣಿಗಳನ್ನೆಲ್ಲಾ ಇಡೀ
ಯೆಹೂದ ಪ್ರಾಂತ್ಯದಲ್ಲಿರುವ ಪ್ರಜೆಯವರಿಗಾಗಿ, ದೇವಾ
ಲಯದ ಶುದ್ಧೀಕರಣಕ್ಕಾಗಿ ಮತ್ತು ಯೆಹೂದ ರಾಜ್ಯ
ಕ್ಕಾಗಿ ಪಾಪಪರಿಹಾರ ಯಜ್ಞವಾಗಿ ಅರ್ಪಿಸಿದರು.
ಅರಸನಾದ ಹಿಜ್ಕೀಯನು ಆರೋನನ ಸಂತತಿಯರಾದ
ಯಾಜಕರಿಗೆ ಆ ಪಶುಗಳನ್ನು ಯೆಹೋವನ ಯಜ್ಞ
ವೇದಿಕೆಯ ಮೇಲೆ ಹೋಮಮಾಡಲು ಆಜ್ಞಾಪಿಸಿದನು.
22ಯಾಜಕರು ಹೋರಿಗಳನ್ನು ವಧಿಸಿ ಅದರ ರಕ್ತವನ್ನು
ಯಜ್ಞವೇದಿಕೆಯ ಮೇಲೆ ಚಿಮಿಕಿಸಿದರು. ಅನಂತರ ಕುರಿ
ಮರಿಗಳನ್ನು ವಧಿಸಿ ಅದರ ರಕ್ತವನ್ನೂ ಯಜ್ಞವೇದಿಕೆಯ
ಮೇಲೆ ಚಿಮಿಕಿಸಿದರು. 23-24ಆ ಬಳಿಕ ಯಾಜಕರು
ಹೋತಗಳನ್ನು ಅರಸನ ಮತ್ತು ಸೇರಿಬಂದ ಜನಗಳ
ಮುಂದೆ ಪಾಪಪರಿಹಾರಕ ಯಜ್ಞಕ್ಕಾಗಿ ತಂದರು.
ಯಾಜಕರು ಅವುಗಳ ಮೇಲೆ ಕೈಯಿಟ್ಟು ವಧಿಸಿದರು.
ಅದರ ರಕ್ತವನ್ನು ಯಜ್ಞವೇದಿಕೆಯ ಮೇಲೆ ಪಾಪ
ಪರಿಹಾರಕ ಯಜ್ಞವಾಗಿ ಸಮರ್ಪಿಸಿದರು. ದೇವರು
ಇಸ್ರೇಲರ ಪಾಪಗಳನ್ನು ಕ್ಷಮಿಸುವಂತೆ ಅವರು ಹೀಗೆ
ಮಾಡಿದರು. ಸರ್ವಾಂಗಹೋಮಗಳನ್ನೂ ಪಾಪ
ಪರಿಹಾರಕ ಯಜ್ಞಗಳನ್ನೂ ಇಸ್ರೇಲಿನ ಸಮಸ್ತ ಜನರಿಗಾಗಿ
ಅರ್ಪಿಸಬೇಕೆಂದು ರಾಜನು ಆಜ್ಞಾಪಿಸಿದ್ದನು.

25ದಾವೀದನೂ ಅರಸನ ದರ್ಶಿಯಾಗಿದ್ದ ಗಾದನೂ
ಮತ್ತು ಪ್ರವಾದಿಯಾಗಿದ್ದ ನಾತಾನನೂ ಆಜ್ಞಾಪಿಸಿದಂತೆ,
ಅರಸನಾದ ಹಿಜ್ಕೀಯನು ಲೇವಿಯರನ್ನು ತಾಳ,
ತಂತಿವಾದ್ಯ ಮತ್ತು ಕಿನ್ನರಿಗಳೊಂದಿಗೆ ದೇವಾಲಯದಲ್ಲಿ
ಇರಿಸಿದನು. ಈ ಆಜ್ಞೆಯು ಯೆಹೋವನಿಂದ ಪ್ರವಾದಿಗಳ
ಮೂಲಕ ಬಂದಿತ್ತು. 26ಹೀಗೆ ಲೇವಿಯರು ದಾವೀದನ
ಸಂಗೀತ ವಾದ್ಯಗಳೊಡನೆ ತಯಾರಾಗಿ ನಿಂತರು ಮತ್ತು
ಯಾಜಕರು ತುತ್ತೂರಿಗಳೊಂದಿಗೆ ತಯಾರಾಗಿ ನಿಂತರು.
27ಆ ಬಳಿಕ ಹಿಜ್ಕೀಯನು ಸರ್ವಾಂಗಹೋಮವನ್ನು
ಅರ್ಪಿಸಲು ಆಜ್ಞಾಪಿಸಿದನು. ಸರ್ವಾಂಗಹೋಮ
ಆರಂಭವಾದ ಕೂಡಲೇ ದೇವರಿಗೆ ಸ್ತೋತ್ರಗಾನ
ಹಾಡುವದೂ ಪ್ರಾರಂಭವಾಯಿತು. ತುತ್ತೂರಿಯನ್ನು
ಊದಿ ದಾವೀದನ ವಾದ್ಯಗಳನ್ನು ಬಾರಿಸಿದರು. 28ಸೇರಿ

ಬಂದಿದ್ದ ಜನಸಮೂಹದವರು ಸಾಷ್ಟಾಂಗ ನಮಸ್ಕಾರ
ಮಾಡಿದರು. ಯಜ್ಞವು ಮುಗಿಯುವತನಕ ದೇವರ
ಸ್ತೋತ್ರಗಾನ ಮುಂದುವರಿಯಿತು.
29ಯಜ್ಞಸಮರ್ಪಣೆ ಮುಗಿದ ಬಳಿಕ ಅರಸನಾದ
ಹಿಜ್ಕೀಯನೂ ಪ್ರಜೆಗಳೂ ಯೆಹೋವನಿಗೆ ಸಾಷ್ಟಾಂಗ
ನಮಸ್ಕಾರಮಾಡಿದರು. 30ರಾಜನಾದ ಹಿಜ್ಕೀಯನು
ಮತ್ತು ಅವನ ಅಧಿಕಾರಿಗಳು ಯೆಹೋವನಿಗೆ ಸ್ತೋತ್ರ
ಮಾಡಬೇಕೆಂದು ಲೇವಿಯರಿಗೆ ಆಜ್ಞಾಪಿಸಿದರು. ಆಸಾಫ
ಮತ್ತು ಅರಸನಾಗಿದ್ದ ದಾವೀದನು ರಚಿಸಿದ್ದ ಹಾಡು
ಗಳನ್ನು ಗಾಯಕರು ಹಾಡಿ ದೇವರನ್ನು ಸ್ತುತಿಸಿದರು.
ಹೀಗೆ ಜನರೆಲ್ಲಾ ಸಂತೋಷಪಟ್ಟರು. ಅವರೆಲ್ಲರು
ಅಡ್ಡಬಿದ್ದು ದೇವರನ್ನು ಆರಾಧಿಸಿದರು. 31ಹಿಜ್ಕೀಯನು
ಜನರಿಗೆ, “ಯೆಹೂದದ ಜನರೇ, ನೀವೀಗ ನಿಮ್ಮನ್ನು
ಯೆಹೋವನಿಗೆ ಒಪ್ಪಿಸಿದ್ದೀರಿ. ನೀವೀಗ ಬಂದು ದೇವಾ
ಲಯದಲ್ಲಿ ನಿಮ್ಮನಿಮ್ಮ ಯಜ್ಞಗಳನ್ನೂ ಕೃತಜ್ಞತಾಯಜ್ಞ
ಗಳನ್ನೂ ಸಮರ್ಪಿಸಿರಿ” ಎಂದು ಹೇಳಲು ಜನರು ತಮ್ಮ
ಯಜ್ಞಗಳನ್ನು ಸಮರ್ಪಿಸಲು ಮುಂದೆ ಬಂದರು.
ಸರ್ವಾಂಗಹೋಮ ಅರ್ಪಿಸಬೇಕೆಂದಿದ್ದವರು ಸರ್ವಾಂಗ
ಹೋಮಗಳನ್ನು ಅರ್ಪಿಸಿದರು. 32ಹೀಗೆ ಒಟ್ಟು ಎಪ್ಪತ್ತು
ಹೋರಿಗಳನ್ನೂ ನೂರು ಟಗರುಗಳನ್ನೂ ಇನ್ನೂರು
ಕುರಿಗಳನ್ನೂ ಯೆಹೋವನಿಗೆ ಸರ್ವಾಂಗಹೋಮವಾಗಿ
ಸಮರ್ಪಿಸಿದರು. 33ಪವಿತ್ರ ಯಜ್ಞಕ್ಕಾಗಿ ಆರುನೂರು
ಹೋರಿಗಳನ್ನೂ ಮೂರುಸಾವಿರ ಆಡು ಕುರಿಗಳನ್ನೂ
ಸಮರ್ಪಿಸಿದರು. 34ಅಲ್ಲಿ ಪಶುಗಳನ್ನು ವಧಿಸಿ ಅದರ
ಚರ್ಮಸುಲಿದು ಯಜ್ಞಕ್ಕಾಗಿ ಸಿದ್ಧಪಡಿಸಲು ಸಾಕಷ್ಟು
ಯಾಜಕರು ಇರಲಿಲ್ಲ. ಆಗ ಅವರ ಬಂಧುಗಳಾದ
ಲೇವಿಯರು ಬಂದು ಆ ಕೆಲಸ ಮುಗಿಯುವ ತನಕ
ಅವರಿಗೆ ಸಹಾಯ ಮಾಡಿದರು. ಯೆಹೋವನ ಸೇವೆಗೆ
ತಮ್ಮನ್ನು ಸಿದ್ಧಪಡಿಸಿಕೊಳ್ಳಲು ಲೇವಿಯರು ಯಾಜಕ
ರಿಗಿಂತ ಉತ್ಸುಕತೆಯಲ್ಲಿದ್ದರು. 35ಆ ದಿವಸ ಎಷ್ಟೋ
ಸರ್ವಾಂಗಹೋಮಗಳನ್ನೂ ಸಮಾಧಾನಯಜ್ಞಗಳನ್ನೂ
ಪಾನದ್ರವ್ಯದ ಹೋಮಗಳನ್ನೂ ಸಮರ್ಪಿಸಿದರು. ಹೀಗೆ
ದೇವಾಲಯದಲ್ಲಿ ಆರಾಧನೆಯು ಮತ್ತೆ ಪ್ರಾರಂಭ
ವಾಯಿತು. 36ದೇವರು ಅವುಗಳನ್ನು ತನ್ನ ಜನರಿಗಾಗಿ
ಸಿದ್ಧಪಡಿಸಿದ್ದಕ್ಕಾಗಿಯೂ ಅದನ್ನು ಅಲ್ಪಕಾಲಾವಧಿಯಲ್ಲಿ
ಮಾಡಿದ್ದಕ್ಕಾಗಿಯೂ ಹಿಜ್ಕೀಯನು ಮತ್ತು ಯೆಹೂದದ
ಜನರು ಸಂತೋಷಪಟ್ಟರು.

## ಹಿಜ್ಕೀಯನು ಪಸ್ಕಹಬ್ಬವನ್ನು ಆಚರಿಸಿದ್ದು

30 ಅರಸನಾದ ಹಿಜ್ಕೀಯನು ಯೆಹೂದದವರಿಗೂ
ಇಸ್ರೇಲರಿಗೂ ಎಫ್ರಾಯೀಮ್ ಮನಸ್ಸೆ
ಪ್ರಾಂತ್ಯಗಳವರಿಗೂ ಸಂದೇಶ ಕಳುಹಿಸಿ, ಯೆಹೋವನ
ಆಲಯಕ್ಕೆ ಬಂದು ಇಸ್ರೇಲಿನ ಯೆಹೋವ ದೇವರಿಗೆ ಪಸ್ಕ
ಹಬ್ಬವನ್ನು ಆಚರಿಸುವಂತೆ ಅವರನ್ನೆಲ್ಲಾ ಆಮಂತ್ರಿಸಿದನು.
2ಹಿಜ್ಕೀಯ ಅರಸನೂ ಅಧಿಕಾರಿಗಳೂ ಜೆರುಸ
ಲೇಮಿನ ಸಭೆಯವರೆಲ್ಲರೂ ಎರಡನೆಯ ತಿಂಗಳಲ್ಲಿ
ಹಬ್ಬವನ್ನು ಆಚರಿಸಲು ನಿರ್ಧರಿಸಿದರು. 3ಅದಕ್ಕೆ ಕಾರಣ
ವೇನಂದರೆ, ನಿಯಮಿತ ದಿವಸದಲ್ಲಿ ಹಬ್ಬ ನಡೆಸಲು
ಸಾಧ್ಯವಾಗಲಿಲ್ಲ. ಯಾಕಂದರೆ ಬೇಕಾದಷ್ಟು ಯಾಜಕರು
ಆ ಪರಿಶುದ್ಧ ಸೇವೆಗಾಗಿ ತಮ್ಮನ್ನು ಸಿದ್ಧಪಡಿಸಿಕೊಂಡಿರ
ಲಿಲ್ಲ. ಅಲ್ಲದೆ ಜೆರುಸಲೇಮಿನಲ್ಲಿಯೂ ಜನ ಸೇರಿ
ಬರಲಿಲ್ಲ. 4ಈ ನಿರ್ಧಾರವು ಅರಸನಾದ ಹಿಜ್ಕೀಯನಿಗೂ
ಜನರಿಗೂ ಸರಿಕಂಡಿತು. 5ಇದನ್ನು ಬೇರ್ಷೆಬದಿಂದ
ಹಿಡಿದು ದಾನ್ ಪಟ್ಟಣದವರೆಗಿನ ಜನರಿಗೆಲ್ಲಾ ಪ್ರಕಟಿಸಿ
ದರು. ಇಸ್ರೇಲಿನ ದೇವರಾದ ಯೆಹೋವನಿಗೆ ಪಸ್ಕ
ಹಬ್ಬವನ್ನು ಆಚರಿಸುವುದಕ್ಕಾಗಿ ಜೆರುಸಲೇಮಿಗೆ ಬರಲು
ಎಲ್ಲರಿಗೂ ಆಹ್ವಾನಿಸಿದರು. ಮೋಶೆಯು ಹೇಳಿದ್ದ
ನಿಯಮಕ್ಕನುಸಾರವಾಗಿ ಪಸ್ಕಹಬ್ಬವನ್ನು ಎಷ್ಟೋ ಜನರು
ಅನೇಕ ವರ್ಷಗಳಿಂದ ಆಚರಿಸಿರಲಿಲ್ಲ. ಆದಕ್ಕಾಗಿ ಸಂದೇ
ಶಕರು ರಾಜನ ಪತ್ರವನ್ನು ಇಡೀ ಇಸ್ರೇಲ್ ಮತ್ತು
ಯೆಹೂದ ಪ್ರಾಂತ್ಯದ ಜನರಿಗೆ ಕೊಟ್ಟರು. ಅದರಲ್ಲಿ ಹೀಗೆ
ಬರೆದಿದ್ದನು:

“ಇಸ್ರೇಲಿನ ಮಕ್ಕಳೇ, ಅಬ್ರಹಾಮನೂ ಇಸಾಕನೂ
ಯಾಕೋಬನೂ ಆರಾಧಿಸಿದ ದೇವರಾದ
ಯೆಹೋವನ ಕಡೆಗೆ ತಿರುಗಿರಿ. ಆಗ ನಿಮ್ಮಲ್ಲಿ
ಅಶ್ಶೂರದ ಅರಸನ ಕೈಗೆ ಸಿಕ್ಕದಂತೆ ತಪ್ಪಿಸಿಕೊಂಡು
ಉಳಿದವರ ಕಡೆಗೆ ಆತನು ತಿರುಗಿಕೊಳ್ಳುವನು.
7ನಿಮ್ಮ ತಂದೆಗಳೂ ಸಹೋದರರೂ ನಡೆದಂತೆ
ನೀವೂ ನಡೆಯಬೇಡಿರಿ. ಅವರು ತಮ್ಮ ಪಿತೃಗಳ
ದೇವರಾದ ಯೆಹೋವನಿಗೆ ವಿರೋಧವಾಗಿ ನಡೆದ
ಕಾರಣ ಆತನು ಅವರನ್ನು ನಾಶನಕ್ಕೆ ಒಪ್ಪಿಸಿದನು.
ಇದಕ್ಕೆ ನೀವೇ ಸಾಕ್ಷಿಗಳು. 8ನಿಮ್ಮ ಪೂರ್ವಿಕರ ಹಾಗೆ
ಮೊಂಡರಾಗಿರಬೇಡಿ. ನೀವು ಪೂರ್ಣಮನಸ್ಸಿನಿಂದ
ದೇವರಿಗೆ ವಿಧೇಯರಾಗಿರಿ. ಆತನ ಶಾಶ್ವತವಾದ
ಮಹಾ ಪವಿತ್ರ ಸ್ಥಳಕ್ಕೆ ಬನ್ನಿರಿ. ನಿಮ್ಮ ದೇವರಾದ
ಯೆಹೋವನನ್ನು ಆರಾಧಿಸಿರಿ ಮತ್ತು ಆತನ ಸೇವೆ
ಮಾಡಿರಿ. ಆಗ ನಿಮ್ಮ ಮೇಲಿರುವ ಆತನ ಕೋಪವು
ಶಮನವಾಗುವುದು. 9ನೀವು ಯೆಹೋವನಿಗೆ
ವಿಧೇಯರಾದರೆ ನಿಮ್ಮ ಮಕ್ಕಳೂ ಬಂಧುಗಳೂ
ತಮ್ಮನ್ನು ಸೆರೆಹಿಡಿದವರಿಂದ ಕರುಣೆಯನ್ನು
ಹೊಂದಿ ಮತ್ತೆ ಈ ದೇಶಕ್ಕೆ ಬರುವರು. ದೇವರಾದ
ಯೆಹೋವನು ದಯೆಯೂ ಕರುಣೆಯೂ ಉಳ್ಳವ
ನಾಗಿದ್ದಾನೆ. ನೀವು ಆತನ ಕಡೆಗೆ ತಿರುಗಿದರೆ ಆತನು
ನಿಮ್ಮನ್ನು ತಳ್ಳಿಬಿಡುವುದಿಲ್ಲ.”

[10]ಸಂದೇಶಕಾರರು ಎಫ್ರಾಯೀಮ್ ಮತ್ತು ಮನಸ್ಸೆ
ಪ್ರಾಂತ್ಯಗಳ ಪ್ರತಿಯೊಂದು ಪಟ್ಟಣಗಳಿಗೆ ಹೋದರು.
ಜೆಬುಲೂನ್ ಪ್ರಾಂತ್ಯಕ್ಕೂ ಹೋದರು. ಆದರೆ ಜನರು
ಸಂದೇಶಕರನ್ನು ಗೇಲಿಮಾಡಿದರು. [11]ಆದರೆ ಆಶೇರ್,
ಮನಸ್ಸೆ ಮತ್ತು ಜೆಬುಲೂನ್ ಪ್ರಾಂತ್ಯಗಳ ಕೆಲವರು
ತಮ್ಮನ್ನು ತಗ್ಗಿಸಿಕೊಂಡು ಜೆರುಸಲೇಮಿಗೆ ಹೋದರು.
[12]ಇದಲ್ಲದೆ, ದೇವರ ಶಕ್ತಿಯು ಯೆಹೂದದ ಜನರನ್ನು
ಒಂದಾಗಿಮಾಡಿತು. ಆದ್ದರಿಂದ ಅವರು ಅರಸನಿಗೆ ಮತ್ತು
ಅಧಿಕಾರಿಗಳಿಗೆ ವಿಧೇಯರಾದರು. ಹೀಗೆ ಜನರು
ಯೆಹೋವನ ಕಟ್ಟಳೆಗಳಿಗೆ ವಿಧೇಯರಾದರು. [13]ಜೆರುಸ
ಲೇಮಿನಲ್ಲಿ ಹುಳಿಯಿಲ್ಲದ ರೊಟ್ಟಿಯ ಹಬ್ಬವನ್ನು
ಆಚರಿಸಲು ಎಷ್ಟೋ ಮಂದಿ ಜೆರುಸಲೇಮಿಗೆ ಎರಡ
ನೆಯ ತಿಂಗಳಲ್ಲಿ ಬಂದರು. ಅದು ಮಹಾ ಜನಸಮೂಹ
ವಾಗಿತ್ತು. [14]ಆ ಜನರು ಜೆರುಸಲೇಮಿನೊಳಗಿದ್ದ ಅನ್ಯ
ದೇವರುಗಳಿಗಾಗಿ ಮಾಡಿದ್ದ ಯಜ್ಞವೇದಿಕೆಗಳನ್ನು
ಕೆಡವಿಹಾಕಿದರು; ವಿಗ್ರಹಗಳಿಗೆ ಧೂಪ ಸಮರ್ಪಣೆಗಾಗಿ
ಮಾಡಿದ ವೇದಿಕೆಗಳನ್ನೂ ಹಾಳುಗೆಡಹಿದರು. ಅವು
ಗಳನ್ನೆಲ್ಲಾ ಕಿದ್ರೋನ್ ಕಣಿವೆಯಲ್ಲಿ ಬಿಸಾಡಿದರು. [15]ಆ
ಬಳಿಕ ಎರಡನೆಯ ತಿಂಗಳಿನ ಹದಿನಾಲ್ಕನೆಯ ದಿವಸದಲ್ಲಿ
ಪಸ್ಕದ ಕುರಿಮರಿಯನ್ನು ಕೊಯ್ದರು. ಯಾಜಕರೂ
ಲೇವಿಯರೂ ನಾಚಿಕೆಯಿಂದ* ತಮ್ಮನ್ನು ಸೇವೆಗಾಗಿ
ಸಿದ್ಧಪಡಿಸಿಕೊಂಡು ಸರ್ವಾಂಗಹೋಮಕ್ಕಾಗಿ ಕಾಣಿಕೆ
ಗಳನ್ನು ಯೆಹೋವನ ಮಂದಿರಕ್ಕೆ ತಂದರು.
[16]ಮೋಶೆಯ ಕಟ್ಟಳೆಯ ಪ್ರಕಾರವಾಗಿ ಅವರು ತಮ್ಮ
ತಮ್ಮ ಸ್ಥಾನಗಳಲ್ಲಿ ನಿಂತುಕೊಂಡು ಸೇವೆ ನಡಿಸಿದರು.
ಲೇವಿಯರು ರಕ್ತವನ್ನು ಯಾಜಕರಿಗೆ ಕೊಟ್ಟರು. ಯಾಜ
ಕರು ಆ ರಕ್ತವನ್ನು ವೇದಿಕೆಯ ಮೇಲೆ ಚಿಮಿಕಿಸಿದರು.
[17]ಜನಸಮೂಹದವರಲ್ಲಿ ಎಷ್ಟೋ ಮಂದಿ ಪವಿತ್ರ
ಸೇವೆಗಾಗಿ ತಮ್ಮನ್ನು ಸಿದ್ಧಮಾಡಿಕೊಂಡಿರಲಿಲ್ಲ. ಆದ್ದ
ರಿಂದ ಪಸ್ಕದ ಕುರಿಯನ್ನು ಅವರು ವಧಿಸಲಾಗಲಿಲ್ಲ.
ಲೇವಿಯರೇ ಅವರ ಬದಲಾಗಿ ಪಸ್ಕದ ಕುರಿಯನ್ನು
ವಧಿಸಿದರು. ಹೀಗೆ ಲೇವಿಯರು ಪ್ರತಿಯೊಂದು ಕುರಿ
ಯನ್ನು ದೇವರಿಗಾಗಿ ಪರಿಶುದ್ಧಗೊಳಿಸಿ ಸಮರ್ಪಿಸಿದರು.
[18-19]ಎಫ್ರಾಯೀಮ್ , ಮನಸ್ಸೆ, ಇಸ್ಸಾಕಾರ್ ಮತ್ತು
ಜೆಬುಲೂನಿನಿಂದ ಬಂದಿದ್ದ ಎಷ್ಟೋ ಮಂದಿ ಪಸ್ಕ
ಹಬ್ಬಕ್ಕಾಗಿ ತಮ್ಮನ್ನು ಸಿದ್ಧಮಾಡಿ ಕೊಂಡಿರಲಿಲ್ಲ. ಅವರು
ಪಸ್ಕದ ಕುರಿಮರಿಯನ್ನು ಯೋಗ್ಯವಾದ ರೀತಿಯಲ್ಲಿ
ತಿನ್ನಲಿಲ್ಲ. ಆದರೆ ಹಿಜ್ಕೀಯನು ಅಂಥವರಿಗೋಸ್ಕರ
ವಾಗಿ, ‘‘ದೇವರಾದ ಯೆಹೋವನೇ, ನೀನು ಒಳ್ಳೆಯ
ವನಾಗಿರುವೆ. ಇವರು ಯೋಗ್ಯವಾದ ರೀತಿಯಲ್ಲಿ ನಿನ್ನನ್ನು
ಆರಾಧಿಸಲು ಬಂದಿದ್ದಾರೆ. ಆದರೆ ಧರ್ಮಶಾಸ್ತ್ರದ
ಪ್ರಕಾರ ಅವರು ತಮ್ಮನ್ನು ಶುದ್ಧ ಮಾಡಿಕೊಳ್ಳಲಿಲ್ಲ.
ದಯಮಾಡಿ ಅವರನ್ನು ಕ್ಷಮಿಸು. ನಮ್ಮ ಪಿತೃಗಳು
ವಿಧೇಯರಾಗಿದ್ದ ದೇವರೇ, ಜನರು ಮೋಶೆಯ
ನಿಯಮಕ್ಕನುಸಾರವಾಗಿ ತಮ್ಮನ್ನು ಶುದ್ಧಿ ಮಾಡಿಕೊಂಡಿ
ಲ್ಲದಿದ್ದರೂ ನೀನು ಅವರನ್ನು ದಯವಿಟ್ಟು ಕ್ಷಮಿಸು’’
ಎಂದು ಪ್ರಾರ್ಥಿಸಿದನು. [20]ಯೆಹೋವನು ಹಿಜ್ಕೀಯನ
ಪ್ರಾರ್ಥನೆಯನ್ನು ಕೇಳಿ ಅವರನ್ನು ಕ್ಷಮಿಸಿದನು. [21]ಇಸ್ರೇ
ಲರು ಜೆರುಸಲೇಮಿನಲ್ಲಿ ಹುಳಿ ಇಲ್ಲದ ರೊಟ್ಟಿಯ
ಹಬ್ಬವನ್ನು ಏಳು ದಿವಸಗಳ ತನಕ ಆಚರಿಸಿದರು.
ಅವರೆಲ್ಲಾ ಹರ್ಷದಿಂದ ತುಂಬಿ ಹಬ್ಬವನ್ನು ಆಚರಿಸಿದರು.
ಯಾಜಕರೂ ಲೇವಿಯರೂ ಪ್ರತಿದಿನ ಗಟ್ಟಿಯಾಗಿ
ಸ್ತುತಿಗೀತೆಗಳನ್ನು ಹಾಡಿದರು. [22]ದೇವರ ಸೇವೆ ಮಾಡು
ವದನ್ನು ತಿಳಿದಿದ್ದ ಲೇವಿಯರನ್ನು ಹಿಜ್ಕೀಯನು ಪ್ರೋತ್ಸಾ
ಹಿಸಿದನು. ಜನರು ಏಳು ದಿವಸ ಹಬ್ಬವನ್ನು ಆಚರಿಸಿ
ಸಮಾಧಾನಯಜ್ಞವನ್ನು ಸಮರ್ಪಿಸಿದರು; ತಮ್ಮ ಪೂರ್ವಿ
ಕರ ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡಿದರು.

[23]ಬಂದವರೆಲ್ಲರೂ ಇನ್ನೂ ಏಳು ದಿವಸ ಅಲ್ಲಿಯೇ
ಇರಲು ಒಪ್ಪಿಕೊಂಡರು. ಇನ್ನೂ ಏಳು ದಿವಸ ಪಸ್ಕಹಬ್ಬ
ಆಚರಿಸಲು ಅವರು ಸಂತೋಷಪಟ್ಟರು. [24]ಯೆಹೂದದ
ಅರಸನಾದ ಹಿಜ್ಕೀಯನು ಸೇರಿಬಂದ ಜನರಿಗೆ ಒಂದು
ಸಾವಿರ ಹೋರಿಗಳನ್ನೂ ಏಳು ಸಾವಿರ ಕುರಿಗಳನ್ನೂ
ವಧಿಸಿ ತಿನ್ನಲು ಕೊಟ್ಟನು. ಪ್ರಧಾನರು ಒಂದು ಸಾವಿರ
ಹೋರಿಗಳನ್ನೂ ಹತ್ತು ಸಾವಿರ ಕುರಿಗಳನ್ನೂ ಸೇರಿಬಂದ
ಜನರಿಗೆ ಕೊಟ್ಟರು. ಎಷ್ಟೋ ಮಂದಿ ಯಾಜಕರು ಪವಿತ್ರ
ಸೇವೆಗೆ ತಮ್ಮನ್ನು ಶುದ್ಧಪಡಿಸಿಕೊಂಡರು. [25]ಯೆಹೂದದ
ಜನರೆಲ್ಲರೂ ಲೇವಿಯರೂ ಇಸ್ರೇಲಿನಿಂದ ಬಂದ
ಜನರೂ ಮತ್ತು ಇಸ್ರೇಲಿನಿಂದ ಬಂದು ಯೆಹೂದದಲ್ಲಿ
ನೆಲೆಸಿದ್ದ ವಿದೇಶಿಯರೂ ಹಬ್ಬವನ್ನು ಆಚರಿಸಿ ಬಹಳ
ವಾಗಿ ಸಂತೋಷಿಸಿದರು.

[26]ಜೆರುಸಲೇಮಿನಲ್ಲಿ ಸಂತಸವು ತುಂಬಿತ್ತು. ಸೊಲೊ
ಮೋನ್ ಅರಸನ ಸಮಯದಿಂದ ಆಂದಿನ ತನಕ ಅಂಥಾ
ಹಬ್ಬವು ಆಚರಿಸಲ್ಪಟ್ಟಿರಲಿಲ್ಲ. [27]ಯಾಜಕರು ಮತ್ತು
ಲೇವಿಯರು ಎದ್ದುನಿಂತು ಜನರನ್ನು ಯೆಹೋವನು
ಆಶೀರ್ವದಿಸುವಂತೆ ಕೇಳಿಕೊಂಡರು. ದೇವರು ಪರ
ಲೋಕದ ತನ್ನ ಪವಿತ್ರ ನಿವಾಸಕ್ಕೆ ಬಂದ ಆ ಪ್ರಾರ್ಥನೆಗೆ
ಕಿವಿಗೊಟ್ಟನು.

### ಅರಸನಾದ ಹಿಜ್ಕೀಯನ ಅಭಿವೃದ್ಧಿಕಾರ್ಯಗಳು

31 ಪಸ್ಕಹಬ್ಬದ ಆಚರಣೆಯು ಮುಕ್ತಾಯ
ವಾಯಿತು. ಇಸ್ರೇಲಿನಿಂದ ಜೆರುಸಲೇಮಿಗೆ
ಬಂದಿದ್ದವರು ಯೆಹೂದದ ಪಟ್ಟಣಗಳಿಗೆ ಹೋದರು.
ಅಲ್ಲಿದ್ದ ಕಲ್ಲಿನ ವಿಗ್ರಹಗಳನ್ನು ಒಡೆದು ನಾಶಮಾಡಿದರು;

**ನಾಚಿಕೆಯಿಂದ** ದೇವರ ಕೆಲಸವನ್ನು ಅಲಕ್ಷ್ಯ ಮಾಡಿದ್ದರಿಂದ ಅವರು ನಾಚಿಕೊಂಡರು.

ಅಶೇರಸ್ತಂಭಗಳನ್ನು ಮತ್ತು; ಪೂಜಾಸ್ಥಳಗಳನ್ನು ಕೆಡವಿ
ಹಾಕಿದರು. ಹೀಗೆ ಅವರು ಯೆಹೂದ ಮತ್ತು ಬೆನ್ಯಾ
ಮೀನ್ ಪ್ರಾಂತ್ಯಗಳಲ್ಲೆಲ್ಲಾ ಸಂಚಾರ ಮಾಡಿದರು. ಆ
ಜನರು ಎಫ್ರಾಯೀಮ್ ಮನಸ್ಸೆ ಪ್ರಾಂತ್ಯಗಳಲ್ಲಿಯೂ
ಹಾಗೆಯೇ ಮಾಡಿದರು. ವಿಗ್ರಹಗಳನ್ನು ಪೂಜಿಸಲು
ಮಾಡಿದ ಎಲ್ಲಾ ವಸ್ತುಗಳನ್ನು ನಾಶಮಾಡಿದರು. ಬಳಿಕ
ಆ ಇಸ್ರೇಲರೆಲ್ಲಾ ತಮ್ಮ ಮನೆಗಳಿಗೆ ಹಿಂದಿರುಗಿದರು.

2ಯಾಜಕರೂ ಲೇವಿಯರೂ ಬೇರೆ ಬೇರೆ ಗುಂಪು
ಗಳಾಗಿ ವಿಭಾಗಿಸಲ್ಪಟ್ಟಿದ್ದರು. ಪ್ರತಿಯೊಂದು ಗುಂಪಿನ
ವರಿಗೂ ಪ್ರತ್ಯೇಕವಾದ ಸೇವಾಕಾರ್ಯವು ಕೊಡಲ್ಪ
ಟ್ಟಿತ್ತು. ಅರಸನಾದ ಹಿಜ್ಕೀಯನು ಅವರ ಕೆಲಸಗಳನ್ನು
ಮತ್ತೆ ಪ್ರಾರಂಭಿಸಲು ಈ ಗುಂಪಿನವರಿಗೆ ಹೇಳಿದನು.
ಹೀಗೆ ಯಾಜಕರೂ ಲೇವಿಯರೂ ಮತ್ತೆ ಸರ್ವಾಂಗ
ಹೋಮಗಳನ್ನೂ ಸಮಾಧಾನಯಜ್ಞಗಳನ್ನೂ ಸಮರ್ಪಿ
ಸುತ್ತಿದ್ದರು. ಅಲ್ಲದೆ ದೇವಾಲಯದೊಳಗೆ ದೇವರಿಗೆ
ಸ್ತುತಿಗೀತೆ ಹಾಡುವ ಕೆಲಸವೂ ಅವರದೇ ಆಗಿತ್ತು.
3ಹಿಜ್ಕೀಯನು ತನ್ನ ಪಶುಗಳಲ್ಲಿ ಕೆಲವನ್ನು ಸರ್ವಾಂಗ
ಹೋಮಕ್ಕಾಗಿ ಕೊಟ್ಟನು. ಇವುಗಳನ್ನು ಪ್ರತಿನಿತ್ಯದ ಬೆಳಿಗ್ಗೆ
ಮತ್ತು ಸಂಜೆ ಸಮರ್ಪಿಸುವ ಸರ್ವಾಂಗಹೋಮಗಳಿಗಾಗಿ
ಉಪಯೋಗಿಸಿಕೊಳ್ಳಲಾಯಿತು; ಅಲ್ಲದೆ ಸಬ್ಬತ್ ದಿನ
ದಂದೂ ಅಮವಾಸ್ಯೆ ದಿನದಂದೂ ಅವುಗಳನ್ನು ಅರ್ಪಿ
ಸಿದರು. ಇವೆಲ್ಲಾ ದೇವರ ಕಟ್ಟಳೆಗಳಿಗನುಸಾರವಾಗಿದ್ದವು.
4ದೇಶದ ಜನರು ಯಾಜಕರಿಗೂ ಲೇವಿಯರಿಗೂ ತಮ್ಮ
ಬೆಳೆಯ ಒಂದು ಪಾಲನ್ನು ಕೊಡಬೇಕಾಗಿತ್ತು. ಹಿಜ್ಕೀ
ಯನು ಯಾಜಕರಿಗೂ ಲೇವಿಯರಿಗೂ ಅವರು
ಕೊಡಬೇಕಾಗಿದ್ದ ಪಾಲನ್ನು ಕೊಡಬೇಕೆಂದು ಜೆರುಸ
ಲೇಮಿನಲ್ಲಿ ವಾಸಿಸುತ್ತಿದ್ದ ಜನರಿಗೆ ಆಜ್ಞಾಪಿಸಿದನು.
ಹೀಗಿರುವಾಗ ಯಾಜಕರೂ ಲೇವಿಯರೂ ತಮ್ಮ
ಸಮಯವನ್ನೆಲ್ಲಾ ದೇವರ ಸೇವೆಯಲ್ಲಿ ಕಳೆಯಬಹುದು.
5ದೇಶದ ಜನರೆಲ್ಲಾ ಅರಸನ ಈ ಆಜ್ಞೆಯನ್ನು ಕೇಳಿ ಧಾನ್ಯ,
ದ್ರಾಕ್ಷಾರಸ, ಎಣ್ಣೆ, ಜೇನುತುಪ್ಪ ಮುಂತಾದ ಎಲ್ಲವು
ಗಳಲ್ಲಿ ಮತ್ತು ಪ್ರಥಮ ಫಲಗಳಲ್ಲಿ ಹತ್ತನೆಯ ಒಂದು
ಪಾಲನ್ನು ಲೇವಿಯರಿಗೆ ಕೊಟ್ಟರು. 6ಇಸ್ರೇಲಿನ ಮತ್ತು
ಯೆಹೂದದ ಊರುಗಳಲ್ಲಿ ವಾಸವಾಗಿದ್ದ ಜನರು ತಮ್ಮ
ದನಕರುಗಳಲ್ಲಿ ಮತ್ತು ಕುರಿಗಳಲ್ಲಿ ದಶಾಂಶವನ್ನು
ತಂದುಕೊಟ್ಟರು. ಯೆಹೋವನಿಗೆ ಮೀಸಲಾಗಿ ವಿಶೇಷ
ಸ್ಥಳದಲ್ಲಿ ಇಡತಕ್ಕ ಪವಿತ್ರ ವಸ್ತುಗಳಲ್ಲಿಯೂ ದಶಾಂಶ
ವನ್ನು ತಂದುಕೊಟ್ಟರು. ಇವುಗಳನ್ನೆಲ್ಲ ಅವರು ತಮ್ಮ
ದೇವರಾದ ಯೆಹೋವನಿಗೆ ತಂದು ರಾಶಿ ಹಾಕಿದರು.

7ವರುಷದ ಮೂರನೆಯ ತಿಂಗಳಿನಲ್ಲಿ ಜನರು ತಮ್ಮ
ಕಾಣಿಕೆಗಳನ್ನು ತರಲು ಪ್ರಾರಂಭ ಮಾಡಿದರೆ ಅದು
ಏಳನೆಯ ತಿಂಗಳಲ್ಲಿ ಮುಗಿಯುತ್ತಿತ್ತು. 8ಹಿಜ್ಕೀಯನೂ
ಪ್ರಧಾನರೂ ಜನರ ಕಾಣಿಕೆಯ ರಾಶಿಯನ್ನು ನೋಡಿ
ಯೆಹೋವನಿಗೆ ಸ್ತೋತ್ರ ಮಾಡಿದರು ಮತ್ತು ಅದನ್ನು
ಅರ್ಪಿಸಿದ ಜನರಿಗಾಗಿ ಸ್ತೋತ್ರ ಮಾಡಿದರು.

9ಹಿಜ್ಕೀಯನು ಕಾಣಿಕೆಯ ರಾಶಿಯ ವಿಷಯವಾಗಿ
ಯಾಜಕರೊಂದಿಗೆ ಮತ್ತು ಲೇವಿಯರೊಂದಿಗೆ ಮಾತನಾ
ಡಿದಾಗ 10ಚಾದೋಕನ ಕುಲದ ಮಹಾ ಯಾಜಕನಾದ
ಅಜರ್ಯನು ಹಿಜ್ಕೀಯನಿಗೆ, ‘‘ದೇವಾಲಯಕ್ಕೆ ಜನರು
ಕಾಣಿಕೆಗಳನ್ನು ತರಲು ಪ್ರಾರಂಭ ಮಾಡಿದಂದಿನಿಂದ
ನಮಗೆ ಊಟಕ್ಕೆ ಯಾವ ಕೊರತೆಯೂ ಇಲ್ಲವಾಗಿದೆ.
ನಾವು ತೃಪ್ತಿಯಾಗುವಷ್ಟು ಊಟಮಾಡಿದರೂ ಇನ್ನೂ
ಉಳಿದಿರುತ್ತದೆ. ದೇವರು ನಿಜವಾಗಲೂ ತನ್ನ ಜನರನ್ನು
ಆಶೀರ್ವದಿಸಿರುತ್ತಾನೆ. ಆದುದರಿಂದಲೇ ನಮಗೆ ಹೇರಳ
ವಾಗಿ ಉಳಿದಿದೆ’’ ಎಂದು ಹೇಳಿದನು.

11ಆಗ ಹಿಜ್ಕೀಯನು ದೇವಾಲಯದಲ್ಲಿ ಉಗ್ರಾಣದ
ಕೋಣೆಗಳನ್ನು ಕಟ್ಟಲು ಯಾಜಕರಿಗೆ ಆಜ್ಞಾಪಿಸಿದನು.
ಅಂತೆಯೇ ಅವುಗಳನ್ನು ಕಟ್ಟಲಾಯಿತು. 12ಆ ಬಳಿಕ
ದೇವರಿಗೆ ಕೊಟ್ಟಿದ್ದ ದಶಮಾಂಶ ಮತ್ತು ಬೇರೆ ಕಾಣಿಕೆ
ಗಳನ್ನು ಆ ಉಗ್ರಾಣದ ಕೋಣೆಗಳಲ್ಲಿ ಕೂಡಿಸಿಟ್ಟರು.
ಲೇವಿಯನಾದ ಕೋನನ್ಯನು ಇದರ ಮೇಲ್ವಿಚಾರಕನಾಗಿ
ನೇಮಿಸಲ್ಪಟ್ಟನು. ಇವನಿಗೆ ಸಹಾಯಕನಾಗಿ ಕೋನ
ನ್ಯನ ಸೋದರನಾದ ಶಿಮ್ಮಿಯು ನೇಮಿಸಲ್ಪಟ್ಟನು.
13ಕೋನನ್ಯ ಮತ್ತು ಶಿಮ್ಮಿಯು ಈ ಜನರ ಮೇಲ್ವಿ
ಚಾರಕರಾಗಿದ್ದರು; ಯೆಹೀಯೇಲ್, ಅಜಜ್ಯ, ನಹತ್,
ಅಸಾಹೇಲ್, ಯೆರೀಮೋತ್, ಯೋಜಾಬಾದ್, ಎಲೀ
ಯೇಲ್, ಇಸ್ಮಾಕ್ಯ, ಮಹತ್ ಮತ್ತು ಬೆನಾಯ, ಇವರನ್ನು
ಸಹಾಯಕರಾಗಿ ಅರಸನಾದ ಹಿಜ್ಕೀಯನೂ ದೇವಾಲ
ಯದ ಮೇಲ್ವಿಚಾರಕನಾದ ಅಜರ್ಯನೂ ಆರಿಸಿದರು.
14ಕೋರೆ ಎಂಬ ಲೇವಿಯು ಜನರು ದೇವರಿಗೆ ಸ್ವಇಚ್ಛೆ
ಯಿಂದ ಸಮರ್ಪಿಸಿದ ಕಾಣಿಕೆಗೆ ಮುಖ್ಯಸ್ತನಾಗಿದ್ದನು.
ಅವನು ಅದರ ಲೆಕ್ಕವನ್ನು ಒಪ್ಪಿಸುತ್ತಿದ್ದನು. ಅಲ್ಲದೆ
ಯೆಹೋವನಿಗೆ ಕೊಟ್ಟವುಗಳನ್ನು ಮತ್ತು ಯೆಹೋವನಿಗೆ
ಮೀಸಲಾಗಿಟ್ಟ ಕಾಣಿಕೆಗಳನ್ನು ಹಂಚಿಕೊಡುವುದು ಅವನ
ಜವಾಬ್ದಾರಿಕೆಯಾಗಿತ್ತು. ಅಲ್ಲದೆ ಅವನು ಪೂರ್ವದ ಬಾಗಿ
ಲಿನ ದ್ವಾರಪಾಲಕನಾಗಿದ್ದನು. ಅವನು ಲೇವಿಯನಾದ
ಇವ್ನನ ಮಗನು. 15ಏದೆನ್, ಮಿನ್ಯಾಮಿನ್,
ಯೇಷೂವ, ಶೆಮಾಯ, ಅಮರ್ಯ ಮತ್ತು ಶೆಕನ್ಯ
ಇವರು ಕೋರೆಯ ಸಹಾಯಕರು. ಇವರು ಯಾಜಕರು
ವಾಸಿಸುವ ಪಟ್ಟಣಗಳಲ್ಲಿದ್ದು ನಂಬಿಗಸ್ತಿಕೆಯಿಂದ ಸೇವೆ
ಮಾಡಿದರು. ಕೂಡಿಸಿದ ಕಾಣಿಕೆಗಳನ್ನು ನಂಬಿಗಸ್ತಿಕೆ
ಯಿಂದ ಯಾಜಕರ ಕುಟುಂಬದವರಿಗೆ ಪಕ್ಷಪಾತವಿಲ್ಲದೆ
ಹಂಚಿದರು. 16ಮೂರು ವರ್ಷಕ್ಕೆ ಮೇಲ್ಪಟ್ಟ ಎಲ್ಲಾ ಗಂಡು
ಮಕ್ಕಳಿಗೂ ಲೇವಿಯರ ವಂಶಾವಳಿ ಪಟ್ಟಿಯಲ್ಲಿ ಹೆಸರು
ದಾಖಲಾದವರೆಲ್ಲರಿಗೂ ಹಂಚಿದರು. ಗಂಡಸರು ದೇವಾ
ಲಯದಲ್ಲಿ ತಮಗೆ ಒಪ್ಪಿಸಿರುವ ಕೆಲಸಗಳನ್ನು

ಮಾಡಿದರು. [17]ಒಟ್ಟುಗೂಡಿಸಿದ ಕಾಣಿಕೆಯಲ್ಲಿ ಯಾಜ
ಕರೂ ತಮ್ಮ ಪಾಲನ್ನು ತೆಗೆದುಕೊಂಡರು. ಇದನ್ನು
ವಂಶಾವಳಿಗನುಸಾರವಾಗಿ ಮಾಡಲಾಯಿತು. ಲೇವಿಯ
ರಲ್ಲಿ ಇಪ್ಪತ್ತು ವರ್ಷದವರೂ ಅದಕ್ಕಿಂತ ಹೆಚ್ಚು ವಯಸ್ಸಾ
ದವರೂ ತಮ್ಮ ಪಾಲನ್ನು ಜವಾಬ್ದಾರಿಗಳಿಗನುಸಾರವಾಗಿ
ತಮ್ಮ ಗುಂಪುಗಳಿಗನುಸಾರವಾಗಿಯೂ ಹೊಂದಿ
ಕೊಂಡರು. [18]ಲೇವಿಯರ ಹೆಂಡತಿಯರಿಗೂ ಮಕ್ಕಳಿಗೂ
ಎಲ್ಲರಿಗೂ ಅದರಲ್ಲಿ ಪಾಲು ದೊರೆಯಿತು. ಯಾರ್ಯಾರ
ಹೆಸರುಗಳು ಲೇವಿಯರ ಕುಟುಂಬದ ಪಟ್ಟಿಯಲ್ಲಿ
ಬರೆಯಲ್ಪಟ್ಟಿತ್ತೋ ಅವರೆಲ್ಲರಿಗೆ ಪಾಲು ದೊರೆಯಿತು.
ಯಾಕಂದರೆ ಲೇವಿಯರು ತಮ್ಮನ್ನು ದೇವಾಲಯದ
ಸೇವೆಗೆ ಯಾವಾಗಲೂ ಸಿದ್ಧಪಡಿಸಿಕೊಳ್ಳುತ್ತಿದ್ದರು.
[19]ಆರೋನನ ಸಂತತಿಯ ಕೆಲವು ಯಾಜಕರಿಗೆ ಲೇವಿ
ಯರು ವಾಸಿಸುತ್ತಿದ್ದ ಪಟ್ಟಣಗಳ ಹತ್ತಿರ ಹೊಲಗಳಿದ್ದವು.
ಆರೋನನ ಸಂತತಿಯವರಲ್ಲಿ ಕೆಲವರು ಲೇವಿಯರ
ಪಟ್ಟಣಗಳಲ್ಲಿಯೂ ವಾಸಮಾಡುತ್ತಿದ್ದರು. ಈ ಆರೋ
ನನ ಸಂತತಿಯವರಿಗೆ ಪಾಲು ಕೊಡಲು ಕೆಲವರನ್ನು
ನೇಮಿಸಲಾಯಿತು. ಗಂಡಸರಿಗೆ ಮತ್ತು ವಂಶಾವಳಿಯಲ್ಲಿ
ಹೆಸರನ್ನು ಹೊಂದಿದ್ದ ಎಲ್ಲಾ ಲೇವಿಯರಿಗೆ ಸಂಗ್ರಹಿ
ಸಲ್ಪಟ್ಟಿದ್ದರಲ್ಲಿ ಅವರವರ ಪಾಲು ದೊರೆಯಿತು.

[20]ಹೀಗೆ ಅರಸನಾದ ಹಿಜ್ಕೀಯನು ಯೆಹೂದ ದೇಶ
ದಲ್ಲಿ ಈ ಒಳ್ಳೆಯ ಕಾರ್ಯವನ್ನು ಮಾಡಿದನು. ದೇವರಾದ
ಯೆಹೋವನ ದೃಷ್ಟಿಯಲ್ಲಿ ಯೋಗ್ಯವಾದದ್ದನ್ನು ನಂಬಿ
ಗಸ್ತಿಕೆಯಿಂದ ಮಾಡಿದನು. [21]ಹಿಜ್ಕೀಯನು ತಾನು
ಪ್ರಾರಂಭಿಸಿದ ಪ್ರತಿಯೊಂದು ಕಾರ್ಯಗಳನ್ನೂ ದೇವಾಲ
ಯದ ಕಾರ್ಯಗಳನ್ನೂ ದೇವರ ಕಟ್ಟಳೆಗಳನ್ನೂ ಅನು
ಸರಿಸುವದನ್ನು ಪೂರ್ಣ ಹೃದಯದಿಂದ ಮಾಡಿ ಯಶಸ್ವಿ
ಯಾದನು.

### ಹಿಜ್ಕೀಯನಿಗೆ ತೊಂದರೆಕೊಟ್ಟ ಅಶ್ಶೂರ್ಯರದ ಅರಸನು

32 ಹೀಗೆ ಒಳ್ಳೆಯ ಕಾರ್ಯಗಳನ್ನು ಹಿಜ್ಕೀಯನು
ಮಾಡುತ್ತಿರುವಾಗ ಅಶ್ಶೂರ್ಯರದ ರಾಜನಾದ
ಸನ್ಹೇರೀಬನು ಯೆಹೂದದ ಮೇಲೆ ಯುದ್ಧ ಮಾಡಲು
ಬಂದನು. ಸರಿಯಾದ ಸಮಯದಲ್ಲಿ ಪಟ್ಟಣದ ಮೇಲೆ
ದಾಳಿ ಮಾಡಿ ಸೋಲಿಸುವದಕ್ಕೋಸ್ಕರ ಸನ್ಹೇರೀಬನೂ
ಅವನ ಸೈನಿಕರೂ ಪಟ್ಟಣಗಳ ಕೋಟೆಗಳ ಹೊರಗಡೆ
ಪಾಳೆಯ ಮಾಡಿದರು.[2]ಜೆರುಸಲೇಮಿನ ಮೇಲೆ ದಾಳಿ
ಮಾಡಲಿಕ್ಕೋಸ್ಕರ ಸನ್ಹೇರೀಬನು ಬಂದಿದ್ದಾನೆಂದು
ಹಿಜ್ಕೀಯನಿಗೆ ತಿಳಿಯಿತು.[3]ಅವನು ತನ್ನ ಅಧಿಕಾರಿ
ಗಳನ್ನೂ ಸೇನಾಪತಿಗಳನ್ನೂ ವಿಚಾರಿಸಿದನು. ಪಟ್ಟಣದ
ಹೊರಗಿರುವ ಬುಗ್ಗೆಯನ್ನು ನಿಲ್ಲಿಸಿಬಿಡಬೇಕೆಂದು ಅವರೆ
ಲ್ಲರೂ ಆಲೋಚನೆ ಮಾಡಿದರು. ಇದನ್ನು ಮಾಡಿ
ಮುಗಿಸಲು ಅಧಿಕಾರಿಗಳೂ ಸೇನಾಪತಿಗಳೂ ಸಹಾಯ
ಮಾಡಿದರು. [4]ಅನೇಕ ಜನರು ಒಟ್ಟಾಗಿ ಬಂದು ದೇಶದ
ಮಧ್ಯದಲ್ಲಿ ಹರಿಯುವ ಹಳ್ಳಗಳನ್ನೂ ತೊರೆಗಳನ್ನೂ
ಬುಗ್ಗೆಗಳನ್ನೂ ನಿಲ್ಲಿಸಿದರು. ಅಶ್ಶೂರ್ಯರದ ಅರಸನು
ಬಂದಾಗ ಅವನಿಗೆ ನೀರು ಸಿಗದಂತೆ ಮಾಡಿದರು.
[5]ನಂತರ ಹಿಜ್ಕೀಯನು ಜೆರುಸಲೇಮಿನ ಬಿದ್ದುಹೋಗಿದ್ದ
ಕೋಟೆಗೋಡೆಗಳನ್ನು ಕಟ್ಟಿಸಿ ಭದ್ರಪಡಿಸಿದನು, ಪೌಳಿ
ಗೋಡೆಯ ಮೇಲೆ ಬುರುಜು ಕಟ್ಟಿಸಿದನು. ಅಲ್ಲದೆ
ಪೌಳಿಗೋಡೆಯ ಹೊರಗೆ ಇನ್ನೊಂದು ಗೋಡೆಯನ್ನೂ
ಕಟ್ಟಿದನು. ಜೆರುಸಲೇಮಿನ ಹಳೇ ಭಾಗದ ಪೂರ್ವದ
ಗೋಡೆಯನ್ನು ಭದ್ರಪಡಿಸಿದನು. ಅವನು ಅನೇಕ
ಆಯುಧಗಳನ್ನು ಮತ್ತು ಗುರಾಣಿಗಳನ್ನು ಮಾಡಿಸಿದನು.
[6-7]ಹಿಜ್ಕೀಯನು ಸೈನಿಕರಿಗೆಲ್ಲಾ ದಳಪತಿಗಳನ್ನು ನೇಮಿಸಿ
ದನು. ಜೆರುಸಲೇಮಿನ ನಗರದ ಹೆಬ್ಬಾಗಿಲ ಬಳಿಯಲ್ಲಿದ್ದ
ಮೈದಾನದಲ್ಲಿ ಹಿಜ್ಕೀಯನು ಸೇನಾಪತಿಗಳೊಂದಿಗೆ ಸಮಾ
ಲೋಚನೆ ನಡಿಸಿದನು; ಅವರನ್ನು ಪ್ರೋತ್ಸಾಹಿಸಿ ಹುರಿ
ದುಂಬಿಸಿದನು. ‘‘ಧೈರ್ಯಶಾಲಿಗಳಾಗಿರಿ. ಬಲಗೊಳ್ಳಿರಿ.
ಅಶ್ಶೂರ್ಯರದ ಅರಸನಿಗಾಗಲೀ ಅರಸನೊಂದಿಗಿರುವ ಆ
ದೊಡ್ಡ ಸೈನ್ಯಕ್ಕಾಗಲೀ ಭಯಪಡಬೇಡಿರಿ. ಅವನಿ
ಗಿಂತಲೂ ಹೆಚ್ಚಾದ ಸಾಮರ್ಥ್ಯ ನಮಗಿದೆ. [8]ಅಶ್ಶೂರ್ಯರದ
ರಾಜನ ಬಳಿಯಲ್ಲಿ ಮನುಷ್ಯರು ಮಾತ್ರ ಇರುವರು.
ಆದರೆ ನಮ್ಮೊಂದಿಗೆ ದೇವರಾದ ಯೆಹೋವನಿದ್ದಾನೆ.
ನಮ್ಮ ದೇವರು ನಮಗೆ ಸಹಾಯ ಮಾಡುತ್ತಾನೆ. ನಮ್ಮ
ಯುದ್ಧದಲ್ಲಿ ಆತನು ನಮಗೋಸ್ಕರ ಕಾದಾಡುವನು’’
ಎಂದು ಹೇಳಿ ಹಿಜ್ಕೀಯ ಅರಸನು ತನ್ನ ಜನರನ್ನು
ಪ್ರೋತ್ಸಾಹಿಸಿ ಬಲಗೊಳಿಸಿದನು.

[9]ಅಶ್ಶೂರ್ಯರದ ಅರಸನಾದ ಸನ್ಹೇರೀಬನು ತನ್ನ ಸಮಸ್ತ
ಸೈನ್ಯದೊಡನೆ ಲಾಕೀಷ್ ಪಟ್ಟಣದ ಸಮೀಪದಲ್ಲಿ
ಪಾಳೆಯ ಮಾಡಿಕೊಂಡಿದ್ದನು. ಅಲ್ಲಿ ತನ್ನ ಸೇವಕರನ್ನು
ಯೆಹೂದದ ಅರಸನಾದ ಹಿಜ್ಕೀಯನ ಬಳಿಗೂ ಮತ್ತು
ಜೆರುಸಲೇಮಿನಲ್ಲಿದ್ದ ಎಲ್ಲಾ ಯೆಹೂದದ ಜನರ ಬಳಿಗೂ
ಸಂದೇಶದೊಡನೆ ಕಳುಹಿಸಿದನು. [10]ಅವರು ಹೇಳಿದ್ದೇ
ನಂದರೆ., ‘ಅಶ್ಶೂರ್ಯರದ ಅರಸನಾದ ಸನ್ಹೇರೀಬನು ಹೇಳು
ವದೇನಂದರೆ, ಮುತ್ತಿಗೆ ಹಾಕಲ್ಪಟ್ಟ ಜೆರುಸಲೇಮಿನಲ್ಲಿ
ನಿಮ್ಮನ್ನು ಇರುವಂತೆ ಮಾಡಿರುವ ಯಾವುದರ ಮೇಲೆ
ನೀವು ಭರವಸವನ್ನಿಟ್ಟಿದ್ದೀರಿ? [11]ಹಿಜ್ಕೀಯನು ನಿಮ್ಮನ್ನು
ಮೋಸಪಡಿಸುತ್ತಿದ್ದಾನೆ. ನೀವು ಜೆರುಸಲೇಮಿನಲ್ಲಿಯೇ
ಇರುವಂತೆ ಹೇಳಿ ನಿಮಗೆ ಮೋಸಮಾಡುತ್ತಿದ್ದಾನೆ. ಹಾಗೆ
ಮಾಡಿದರೆ ನೀವು ಅನ್ನನೀರಿಲ್ಲದೆ ಸಾಯುವಿರಿ. ನಿಮಗೆ
ಹಿಜ್ಕೀಯನು ನಮ್ಮ ದೇವರಾದ ಯೆಹೋವನು
ಅಶ್ಶೂರ್ಯರದ ರಾಜನಿಂದ ಕಾಪಾಡುವನು ಎಂದು ಹೇಳು
ತ್ತಾನಲ್ಲಾ? [12]ಹಿಜ್ಕೀಯನು ತಾನೇ ಪೂಜಾಸ್ಥಳಗಳನ್ನೂ
ವೇದಿಕೆಗಳನ್ನೂ ತೆಗೆದುಹಾಕಿದ್ದಾನೆ. ಒಂದೇ ಒಂದು
ಧೂಪವೇದಿಕೆಯಲ್ಲಿ ಧೂಪಹಾಕಿ ಆರಾಧಿಸಬೇಕೆಂದು

ಅವನು ಯೆಹೂದ ಮತ್ತು ಜೆರುಸಲೇಮಿನ ಜನರಾದ
ನಿಮಗೆ ಹೇಳುತ್ತಿದ್ದಾನೆ. 13ನಮ್ಮ ಪೂರ್ವಿಕರೂ ನಾನೂ
ಬೇರೆ ದೇಶಗಳಿಗೆಲ್ಲಾ ಏನು ಮಾಡಿದ್ದೇವೆಂದು ನಿಮಗೆ
ತಿಳಿದದೆ. ಆ ದೇಶದ ದೇವರುಗಳು ಅವರನ್ನು ಕಾಪಾಡ
ಲಿಲ್ಲ. ಆ ದೇವರುಗಳು ಅವರನ್ನು ನಾಶಮಾಡದಂತೆ
ನನ್ನನ್ನು ತಡೆಯಲಿಲ್ಲ. 14ನನ್ನ ಪೂರ್ವಿಕರು ಆ ದೇಶ
ಗಳನ್ನು ನಾಶಮಾಡಿದರು. ಯಾವ ದೇವರೂ ತನ್ನ
ಜನರನ್ನು ನಾನು ನಾಶಮಾಡದಂತೆ ನನ್ನನ್ನು ತಡೆಯಲು
ಸಾಧ್ಯವಿಲ್ಲ. ನಿಮ್ಮ ದೇವರು ನನ್ನಿಂದ ನಿಮ್ಮನ್ನು ಕಾಪಾಡು
ವನು ಎಂದು ನೀವು ನೆನಸುತ್ತೀರೋ? 15ಹಿಜ್ಕೀಯನು
ನಿಮ್ಮನ್ನು ಮೋಸಗೊಳಿಸದಂತೆ ಜಾಗರೂಕರಾಗಿರಿ. ಅವ
ನನ್ನು ನಂಬಬೇಡಿರಿ. ಯಾವ ದೇಶದ ದೇವರಿಗಾಗಲೀ
ಅವನ ಜನರಿಗಾಗಲೀ ನನ್ನನ್ನೂ ನನ್ನ ಪೂರ್ವಿಕರನ್ನೂ
ತಡೆಯಲು ಸಾಧ್ಯವಾಗಲಿಲ್ಲ. ನಿಮ್ಮ ದೇವರೂ ನನ್ನನ್ನು
ತಡೆಯಲು ಸಾಧ್ಯವಿಲ್ಲ.''

16ಅಶ್ಶೂರ್ಯ ಅರಸನ ಸೇವಕರು ದೇವರಾದ
ಯೆಹೋವನ ವಿರುದ್ಧವಾಗಿಯೂ ದೇವರ ಸೇವಕನಾದ
ಹಿಜ್ಕೀಯನ ವಿರುದ್ಧವಾಗಿಯೂ ಕೀಳಾಗಿ ಮಾತಾಡಿ
ದರು; ಇಸ್ರೇಲಿನ ದೇವರಾದ ಯೆಹೋವನನ್ನು ಹಾಸ್ಯ
ಮಾಡಿದರು. 17ಅಶ್ಶೂರದ ಅರಸನು ಇಸ್ರೇಲಿನ ದೇವ
ರಾದ ಯೆಹೋವನನ್ನು ಅವಮಾನ ಮಾಡಿ ಬರೆದ ಪತ್ರ
ಹೀಗಿತ್ತು: ``ಇತರ ದೇಶಗಳ ದೇವರುಗಳು ತಮ್ಮ ಜನ
ರನ್ನು ನಾಶಮಾಡದಂತೆ ನನ್ನನ್ನು ತಡೆಯಲು ಸಾಧ್ಯ
ವಾಗಲಿಲ್ಲ. ಅದೇ ರೀತಿಯಲ್ಲಿ ಹಿಜ್ಕೀಯನ ದೇವರು ತನ್ನ
ಜನರನ್ನು ನಾಶಮಾಡದ ಹಾಗೆ ನನ್ನನ್ನು ತಡೆಯಲು
ಸಾಧ್ಯವಿಲ್ಲ.''18ಜೆರುಸಲೇಮಿನ ಪೌಳಿಗೋಡೆಯ
ಮೇಲಿದ್ದ ಯೆಹೂದದ ಜನರನ್ನುದ್ದೇಶಿಸಿ ಜೆರುಸ
ಲೇಮಿನ ಜನರು ಭಯಪಡಲೆಂದು ಸನ್ಹೇರೀಬನ ಸೇವ
ಕರು ಗಟ್ಟಿಯಾಗಿ ಇಬ್ರಿಯ ಭಾಷೆಯಲ್ಲಿ ಮಾತನಾ
ಡಿದರು. ಜೆರುಸಲೇಮನ್ನು ವಶಪಡಿಸಿಕೊಳ್ಳಲು ಅವರು
ಹೀಗೆ ಮಾಡಿದರು. 19ಲೋಕದ ಜನರು ಆರಾಧಿಸಿದ
ಮತ್ತು ಕೈಯಾರೆ ಮಾಡಿದ್ದ ದೇವರುಗಳನ್ನು ಜೆರುಸ
ಲೇಮಿನ ದೇವರೊಂದಿಗೆ ಹೋಲಿಸಿ ಆತನ ವಿರುದ್ಧವಾಗಿ
ಮಾತಾಡಿದರು.

20ಅರಸನಾದ ಹಿಜ್ಕೀಯನೂ ಆಮೋಚನ ಮಗನಾದ
ಯೆಶಾಯನೆಂಬ ಪ್ರವಾದಿಯೂ ತಮಗೆ ಬಂದೊದಗಿದ
ಸಮಸ್ಯೆಗಾಗಿ ಪರಲೋಕದ ಕಡೆಗೆ ನೋಡಿ ಗಟ್ಟಿಯಾಗಿ
ಪ್ರಾರ್ಥಿಸಿದರು. 21ಆಗ ಯೆಹೋವನು ಅಶ್ಶೂರದ ಅರ
ಸನ ಪಾಳೆಯಕ್ಕೆ ದೇವದೂತನನ್ನು ಕಳುಹಿಸಿದನು. ಆ
ದೂತನು ಅಶ್ಶೂರದ ಎಲ್ಲಾ ಸೈನ್ಯದವರನ್ನು ಅವರ
ಅಧಿಕಾರಿಗಳನ್ನೂ ಸಂಹರಿಸಿದನು. ಆಗ ಅಶ್ಶೂರದ
ಅರಸನು ತನ್ನ ಸ್ವಂತ ದೇಶಕ್ಕೆ ಹಿಂತಿರುಗಿದನು. ಅವನ
ಜನರು ಅವನ ವಿಷಯದಲ್ಲಿ ನಾಚಿಕೆಪಟ್ಟರು. ಅವನು ತನ್ನ
ದೇವರ ಮಂದಿರದೊಳಕ್ಕೆ ಹೋದಾಗ ಅವನ ಸ್ವಂತ
ಮಕ್ಕಳಲ್ಲಿ ಕೆಲವರು ಅವನನ್ನು ಖಡ್ಗದಿಂದ ಸಂಹರಿಸಿ
ದರು. 22ಈ ರೀತಿಯಾಗಿ ದೇವರಾದ ಯೆಹೋವನು
ಜೆರುಸಲೇಮಿನ ಜನರನ್ನು ಅಶ್ಶೂರದ ಅರಸನಾದ
ಸನ್ಹೇರಿಬನಿಂದಲೂ ಮತ್ತು ಇತರ ಎಲ್ಲಾ ಜನರಿಂದಲೂ
ಪಾರುಮಾಡಿದನು; ಹಿಜ್ಕೀಯನನ್ನು ಮತ್ತು ಜೆರುಸ
ಲೇಮಿನ ಜನರನ್ನೂ ಪರಿಪಾಲನೆ ಮಾಡಿದನು. 23ಎಷ್ಟೋ
ಜನರು ಜೆರುಸಲೇಮಿನಲ್ಲಿನ ದೇವರಾದ ಯೆಹೋವನಿಗೆ
ಕಾಣಿಕೆಗಳನ್ನು ತಂದರು. ಹಾಗೆಯೇ ಅರಸನಾದ ಹಿಜ್ಕೀ
ಯನಿಗೂ ಬೆಲೆಬಾಳುವ ವಸ್ತುಗಳನ್ನು ತಂದರು. ಅಂದಿ
ನಿಂದ ಬೇರೆ ದೇಶದವರು ಹಿಜ್ಕೀಯನನ್ನು
ಗೌರವಿಸಿದರು.

24ಆ ಸಮಯದಲ್ಲಿ ಹಿಜ್ಕೀಯನು ಮರಣಕರವಾದ
ರೋಗದಿಂದ ನರಳುತ್ತಾ ಇದ್ದದರಿಂದ ಯೆಹೋವನಿಗೆ
ಪ್ರಾರ್ಥಿಸಿದನು. ಯೆಹೋವನು ಹಿಜ್ಕೀಯನೊಂದಿಗೆ
ಮಾತನಾಡಿ ಅವನಿಗೊಂದು ಗುರುತನ್ನು ಕೊಟ್ಟನು.
25ಆದರೆ ಹಿಜ್ಕೀಯನ ಹೃದಯವು ಗರ್ವದಿಂದ ತುಂಬಿತ್ತು.
ಅವನು ದೇವರ ಕರುಣೆಗಾಗಿ ಉಪಕಾರಸ್ತುತಿ ಹೇಳಲಿಲ್ಲ.
ಇದರಿಂದಾಗಿ ಆತನು ಹಿಜ್ಕೀಯನ ಮೇಲೂ ಯೆಹೂದ
ಮತ್ತು ಜೆರುಸಲೇಮಿನ ಜನರ ಮೇಲೂ ಕೋಪ
ಗೊಂಡನು. 26ಆಗ ಹಿಜ್ಕೀಯನೂ ಜೆರುಸಲೇಮಿನ
ನಿವಾಸಿಗಳೂ ತಮ್ಮ ಹೃದಯವನ್ನು ಪರಿವರ್ತಿಸಿ
ಕೊಂಡರು; ತಮ್ಮನ್ನು ಬಹಳವಾಗಿ ತಗ್ಗಿಸಿಕೊಂಡು
ಗರ್ವಪಡುವದನ್ನು ನಿಲ್ಲಿಸಿದರು. ಆದುದರಿಂದ ಹಿಜ್ಕೀ
ಯನು ಇದ್ದಷ್ಟು ಕಾಲ ಯೆಹೋವನ ಕೋಪ ಅವರ
ಮೇಲೆ ಬರಲಿಲ್ಲ.

27ಹಿಜ್ಕೀಯನಿಗೆ ಬೇಕಾದಷ್ಟು ಧನೈಶ್ವರ್ಯಗಳಿದ್ದವು.
ಅವನು ಬೆಳ್ಳಿಬಂಗಾರಗಳನ್ನೂ ಸುಗಂಧವಸ್ತುಗಳನ್ನೂ
ಗುರಾಣಿಗಳನ್ನೂ ಬೆಲೆಬಾಳುವ ಆಭರಣಗಳನ್ನೂ
ಇಡಲು ಸ್ಥಳವನ್ನು ಏರ್ಪಡಿಸಿದನು. 28ಧಾನ್ಯ,ಹೊಸ
ದ್ರಾಕ್ಷಾರಸ, ಎಣ್ಣೆ ಇವುಗಳನ್ನೆಲ್ಲಾ ಸಂಗ್ರಹಿಸಲು ಉಗ್ರಾ
ಣಗಳನ್ನು ನಿರ್ಮಿಸಿದನು. ಪಶುಗಳಿಗೂ ಮಂದೆಗಳಿಗೂ
ಹಟ್ಟಿಗಳನ್ನು ಕಟ್ಟಿಸಿದನು. 29ಅವನು ನಗರಗಳನ್ನು ಕಟ್ಟಿಸಿ
ದನು. ಅವನಿಗೆ ದನಕುರಿಗಳ ದೊಡ್ಡ ಹಿಂಡುಗಳಿದ್ದವು;
ದೇವರು ಅವನಿಗೆ ಅಪರಿಮಿತವಾದ ಐಶ್ವರ್ಯವನ್ನು
ಕೊಟ್ಟನು. 30ಹಿಜ್ಕೀಯನು ಗೀಹೋನ್ ಬುಗ್ಗೆಯನ್ನು
ತಡೆದು ಆ ನೀರು ಪಶ್ಚಿಮದ ಕಡೆಯಲ್ಲಿದ್ದ ದಾವೀದ
ನಗರಕ್ಕೆ ನೇರವಾಗಿ ಇಳಿದುಬರುವಂತೆ ಮಾಡಿದನು.
ಅವನು ಕೈಹಾಕಿದ ಕಾರ್ಯಗಳೆಲ್ಲವೂ ಸಫಲವಾದವು.

31ಒಂದು ಸಾರಿ ಬಾಬಿಲೋನಿನವರು ಹಿಜ್ಕೀಯನ
ಬಳಿಗೆ ದೂತರನ್ನು ಕಳುಹಿಸಿದರು. ಅವರು ದೇಶದಲ್ಲಿ
ಆದ ಅದ್ಭುತ ವಿಷಯದ ಬಗ್ಗೆ ವಿಚಾರಿಸಿದರು. ಅವರು
ಹಿಜ್ಕೀಯನ ಬಳಿಗೆ ಬಂದಾಗ ದೇವರು ಅವನನ್ನು

ಪರೀಕ್ಷಿಸುವುದಕ್ಕಾಗಿಯೂ ಅವನ ಹೃದಯದಲ್ಲಿದ್ದ
ಪ್ರತಿಯೊಂದು ಆಲೋಚನೆಯನ್ನು ತಿಳಿದುಕೊಳ್ಳುವು
ದಕ್ಕಾಗಿಯೂ ಅವನನ್ನು ತೊರೆದುಬಿಟ್ಟನು.
32 ಹಿಜ್ಕೀಯನು ಮಾಡಿದ ಇತರ ಕಾರ್ಯಗಳೂ ಅವನ
ಭಕ್ತಿಕಾರ್ಯಗಳೂ ಆಮೋಚನ ಮಗನಾದ ಯೆಶಾಯನ
ದರ್ಶನ ಗ್ರಂಥದಲ್ಲಿ ಬರೆದಿವೆ; ಯೆಹೂದ ಮತ್ತು
ಇಸ್ರೇಲ್ ರಾಜರ ಚರಿತ್ರೆ ಪುಸ್ತಕದಲ್ಲೂ ಬರೆದಿರುತ್ತವೆ.
33 ಹಿಜ್ಕೀಯನು ಸತ್ತು ತನ್ನ ಪೂರ್ವಿಕರ ಬಳಿಗೆ ಸೇರಿದಾಗ
ಅವನ ಶವವನ್ನು ದಾವೀದ ವಂಶದವರ ಕುಟುಂಬ
ಸ್ಮಶಾನ ಭೂಮಿಯ ದಿಬ್ಬದ ಮೇಲೆ ಸಮಾಧಿ ಮಾಡಿ
ದರು. ಅವನು ಸತ್ತಾಗ ಎಲ್ಲಾ ಯೆಹೂದದ ಜನರೂ
ಜೆರುಸಲೇಮಿನ ಜನರೂ ಅವನಿಗೆ ಹೆಚ್ಚಾದ ಗೌರವವನ್ನು
ಕೊಟ್ಟರು. ಹಿಜ್ಕೀಯನ ಬದಲು ಅವನ ಮಗನಾದ
ಮನಸ್ಸೆಯು ಅರಸನಾದನು.

### ಯೆಹೂದದ ಅರಸನಾದ ಮನಸ್ಸೆ

33 ಮನಸ್ಸೆಯು ಪಟ್ಟಕ್ಕೆ ಬಂದಾಗ ಹನ್ನೆರಡು
ವರುಷದವನಾಗಿದ್ದನು. ಅವನು ಜೆರುಸಲೇಮಿ
ನಲ್ಲಿ ರಾಜನಾಗಿ ಐವತ್ತೈದು ವರುಷ ರಾಜ್ಯಭಾರ
ಮಾಡಿದನು. 2 ಯೆಹೋವನು ದುಷ್ಟತನವೆಂದು ಪರಿಗಣಿ
ಸಿದ್ದನ್ನೇ ಮನಸ್ಸೆ ಮಾಡಿದನು. ಇಸ್ರೇಲರು ಆ ದೇಶವನ್ನು
ವಶಪಡಿಸುವದಕ್ಕಿಂತ ಮುಂಚೆ ಅಲ್ಲಿ ವಾಸಿಸುತ್ತಿದ್ದ ಜನರ
ಪಾಪಕಾರ್ಯಗಳನ್ನು ಅನುಸರಿಸಿದನು. 3 ಮನಸ್ಸೆಯ
ತಂದೆಯಾದ ಹಿಜ್ಕೀಯನು ಕೆಡವಿದ ಉನ್ನತ ಸ್ಥಳಗಳನ್ನು
ಅವನು ಮತ್ತೆ ಕಟ್ಟಿಸಿದನು. ಬಾಳ್ ದೇವರ ವೇದಿಕೆಯನ್ನು
ಕಟ್ಟಿಸಿ ಅಶೇರಸ್ತಂಭಗಳನ್ನು ನಿಲ್ಲಿಸಿದನು. ಆಕಾಶದ
ನಕ್ಷತ್ರ ಸಮೂಹಗಳನ್ನು ಪೂಜಿಸಿದನು. 4 ದೇವಾಲಯ
ದೊಳಗೆ ಮನಸ್ಸೆಯು ವಿಗ್ರಹಗಳಿಗೆ ವೇದಿಕೆಯನ್ನು
ಕಟ್ಟಿಸಿದನು. ಯೆಹೋವನು ದೇವಾಲಯದ ವಿಷಯ
ವಾಗಿ, ''ನನ್ನ ಹೆಸರು ಜೆರುಸಲೇಮಿನಲ್ಲಿ ನಿರಂತರಕ್ಕೂ
ಸ್ಥಾಪಿತವಾಗುವದು'' ಎಂದು ಹೇಳಿದ್ದನು. 5 ಮನಸ್ಸೆಯು
ದೇವಾಲಯದ ಎರಡು ಅಂಗಳಗಳಲ್ಲಿ ಎಲ್ಲಾ ನಕ್ಷತ್ರ
ಸಮೂಹಗಳಿಗೆ ವೇದಿಕೆಗಳನ್ನು ಕಟ್ಟಿಸಿದನು. 6 ಬೆನ್
ಹಿನ್ನೋಮ್ ಕಣಿವೆಯಲ್ಲಿ ಮನಸ್ಸೆಯು ತನ್ನ ಸ್ವಂತ
ಮಕ್ಕಳನ್ನು ಅನ್ಯದೇವತೆಗಳಿಗೆ ಯಜ್ಞವಾಗ ಅರ್ಪಿಸಿದನು;
ಮಾಟಮಂತ್ರಗಳನ್ನು ಮಾಡಿದನು; ಪಿಶಾಚಿಗ
ಳೊಂದಿಗೂ ದುರಾತ್ಮಗಳೊಂದಿಗೂ ಸಂಪರ್ಕವನ್ನಿಟ್ಟು
ಕೊಂಡಿದ್ದನು. ಯೆಹೋವನು ಕೆಟ್ಟದ್ದು ಎಂದು ಹೇಳಿದ್ದ
ನ್ನೆಲ್ಲಾ ಅವನು ಮಾಡಿದ್ದರಿಂದ ಆತನು ಅವನ ಮೇಲೆ
ಬಹಳವಾಗಿ ಕೋಪಗೊಂಡನು. 7 ಮನಸ್ಸೆಯು ಒಂದು
ವಿಗ್ರಹವನ್ನು ಯೆಹೋವನ ಮಂದಿರದೊಳಗೆ ಪ್ರತಿಷ್ಠಾ
ಪಿಸಿದನು. ಆ ಮಂದಿರದ ಬಗ್ಗೆ ಯೆಹೋವನು ದಾವೀದ
ನೊಂದಿಗೂ ಸೊಲೊಮೋನನೊಂದಿಗೂ ಮಾತನಾಡಿ,
''ನನ್ನ ಹೆಸರನ್ನು ಈ ಆಲಯದಲ್ಲಿಯೂ ಜೆರುಸಲೇ
ಮಿನಲ್ಲಿಯೂ ಸ್ಥಾಪಿಸುವೆನು. ಈ ಪಟ್ಟಣವನ್ನು ಎಲ್ಲಾ
ಕುಲಗಳ ಎಲ್ಲಾ ಪಟ್ಟಣಗಳಿಂದ ಆರಿಸಿಕೊಂಡಿರುತ್ತೇನೆ.
ಇಲ್ಲಿ ನನ್ನ ನಾಮಸ್ಮರಣೆಯು ಸದಾಕಾಲ ನಡಿಯುವುದು.
8 ನಾನು ಮೋಶೆಯ ಮೂಲಕ ಕೊಟ್ಟಿರುವ ನಿಯಮ
ಗಳಿಗೆ ಮತ್ತು ಆಜ್ಞೆಗಳಿಗೆ ಇಸ್ರೇಲರು ವಿಧೇಯ
ರಾಗಿರುವುದಾದರೆ, ಅವರ ಪೂರ್ವಿಕರಿಗೆ ಕೊಡಲು
ನಾನು ಆರಿಸಿಕೊಂಡ ದೇಶದಿಂದ ಅವರನ್ನು ತೆಗೆದು
ಬಿಡುವುದೇ ಇಲ್ಲ'' ಎಂದು ಹೇಳಿದ್ದನು.
9 ಮನಸ್ಸೆಯು ಯೆಹೂದದ ಜನರನ್ನೂ ಜೆರುಸಲೇಮಿ
ನಲ್ಲಿದ್ದ ಜನರನ್ನೂ ಕೆಟ್ಟ ಕಾರ್ಯಗಳನ್ನು ಮಾಡಲು
ಪ್ರೋತ್ಸಾಹಿಸಿದನು. ಇಸ್ರೇಲರು ಬರುವದಕ್ಕಿಂತ
ಮೊದಲು ಆ ದೇಶದಲ್ಲಿದ್ದ ಜನರಿಗಿಂತಲೂ ಅತ್ಯಂತ
ಕೆಟ್ಟವನಾಗಿ ವರ್ತಿಸಿದನು. ಆ ದೇಶದಲ್ಲಿದ್ದ ಜನರನ್ನು
ಯೆಹೋವನು ನಾಶಮಾಡಿದ್ದನು.
10 ಯೆಹೋವನು ಮನಸ್ಸೆಯ ಮತ್ತು ಅವನ ಜನರ
ಸಂಗಡ ಮಾತಾಡಿದರೂ ಅವರು ಆತನ ಮಾತನ್ನು
ಕೇಳಲಿಲ್ಲ. 11 ಆದ್ದರಿಂದ ಅಶ್ಶೂರ್ ದೇಶದ ಅರಸನ
ಸೇನಾಪತಿಗಳು ಬಂದು ಯೆಹೂದದ ಮೇಲೆ ಯುದ್ಧ
ಮಾಡುವಂತೆ ಯೆಹೋವನು ಮಾಡಿದನು. ಆ ಸೇನಾ
ಪತಿಗಳು ಮನಸ್ಸೆಯನ್ನು ಬಂಧಿಸಿ ಸೆರೆಯಲ್ಲಿಟ್ಟರು.
ಅವನಿಗೆ ಕೊಂಡಿಗಳನ್ನು ಸಿಕ್ಕಿಸಿ ಬೇಡಿಹಾಕಿ ಬಾಬಿ
ಲೋನಿಗೆ ಒಯ್ದರು.
12 ಈ ಸಂಕಷ್ಟಗಳು ಅವನಿಗೆ ಒದಗಿದಾಗ ಅವನು
ದೇವರಾದ ಯೆಹೋವನನ್ನು ತನಗೆ ಸಹಾಯ ಮಾಡಲು
ಬೇಡಿದನು. ತನ್ನ ಪೂರ್ವಿಕರ ದೇವರ ಮುಂದೆ ತನ್ನನ್ನು
ಬಹಳವಾಗಿ ತಗ್ಗಿಸಿಕೊಂಡನು. 13 ಯೆಹೋವನು ಮನ
ಸ್ಸೆಯ ಬೇಡಿಕೆಗಳನ್ನು ಕೇಳಿ ಅವನಿಗೆ ಕರುಣೆ ತೋರಿ
ದನು. ಅವನು ಜೆರುಸಲೇಮಿಗೂ ತನ್ನ ಸಿಂಹಾಸನಕ್ಕೂ
ಹಿಂತಿರುಗಿ ಬರುವಂತೆ ಮಾಡಿದನು. ಆಗ ಮನಸ್ಸೆಯು
ಯೆಹೋವನೇ ನಿಜ ದೇವರೆಂದು ಅರಿತನು.
14 ಇದಾದ ನಂತರ ಮನಸ್ಸೆಯು ದಾವೀದನಗರಕ್ಕೆ
ಹೊರಗಿನ ಗೋಡೆಯನ್ನು ಕಟ್ಟಿಸಿದನು. ಈ ಗೋಡೆಯು
ಕಿದ್ರೋನಿನಲ್ಲಿದ್ದ ಗೀಹೋನ್ ಬುಗ್ಗೆಯ ಪಶ್ಚಿಮ ದಿಕ್ಕಿ
ನಿಂದ ಮೀನು ಬಾಗಿಲಿನ ಮುಂದೆ ಹೋಗಿ, ಅಲ್ಲಿಂದ
ಓಫೆಲ್ ಗುಡ್ಡಕ್ಕೆ ಸುತ್ತು ಹಾಕಿತು. ಅವನು ಗೋಡೆಯನ್ನು
ಬಹು ಎತ್ತರವಾಗಿ ಕಟ್ಟಿದನು. ಆಮೇಲೆ ಯೆಹೂದ
ದಲ್ಲಿದ್ದ ಎಲ್ಲಾ ಕೋಟೆಗಳಲ್ಲಿ ಸೇನಾಪತಿಗಳನ್ನು ನೇಮಿ
ಸಿದನು; 15 ಅನ್ಯದೇವತೆಗಳ ವಿಗ್ರಹವನ್ನು ತೆಗಿಸಿದನು;
ದೇವಾಲಯದೊಳಗಿದ್ದ ವಿಗ್ರಹವನ್ನು ತೆಗೆದುಹಾಕಿಸಿ
ದನು. ಜೆರುಸಲೇಮಿನಲ್ಲಿಯೂ ದೇವಾಲಯದ ಗುಡ್ಡ
ದಲ್ಲಿಯೂ ಪ್ರತಿಷ್ಠಾಪಿಸಿದ್ದ ಎಲ್ಲಾ ವಿಗ್ರಹಗಳನ್ನು
ತೆಗೆದುಹಾಕಿಸಿದನು. ಕಟ್ಟಿಸಿದ ಎಲ್ಲಾ ವೇದಿಕೆಗಳನ್ನು

ಜೆರುಸಲೇಮಿನಿಂದ ಹೊರಗೆ ಬಿಸಾಡಿಸಿದನು.
[16]ಯೆಹೋವನ ಯಜ್ಞವೇದಿಕೆಯನ್ನು ಕಟ್ಟಿಸಿ ಅದರಲ್ಲಿ
ಸಮಾಧಾನಯಜ್ಞಗಳನ್ನೂ ಕೃತಜ್ಞತಾಯಜ್ಞಗಳನ್ನೂ
ಸಮರ್ಪಿಸಿದನು. ಯೆಹೂದದಲ್ಲಿದ್ದ ಎಲ್ಲಾ ಜನರೂ
ದೇವರಾದ ಯೆಹೋವನ ಸೇವೆಮಾಡುವಂತೆ ಆಜ್ಞೆ ವಿಧಿಸಿ
ದನು. [17]ಜನರು ಉನ್ನತಸ್ಥಳಗಳಲ್ಲಿ ಯಜ್ಞವನ್ನು ಮಾಡು
ತ್ತಿದ್ದರೂ ಅದನ್ನು ಯೆಹೋವನಿಗೋಸ್ಕರವೇ ಮಾಡು
ತ್ತಿದ್ದರು.

[18]ಮನಸ್ಸೆ ಮಾಡಿದ ಇತರ ಕಾರ್ಯಗಳು ಮತ್ತು ಅವನು
ಯೆಹೋವನಿಗೆ ಮಾಡಿದ ಪ್ರಾರ್ಥನೆ, ದೇವರದರ್ಶಿಗಳು
ಅವನಿಗೆ ಇಸ್ರೇಲರ ದೇವರಾದ ಯೆಹೋವನ ಸಂದೇಶ
ವನ್ನು ಕೊಟ್ಟ ವಿಷಯವೆಲ್ಲಾ ಇಸ್ರೇಲ್ ರಾಜರ ಚರಿತ್ರೆ
ಎಂಬ ಗ್ರಂಥದಲ್ಲಿ ಬರೆಯಲ್ಪಟ್ಟಿದೆ. [19]ಮನಸ್ಸೆಯ
ಪ್ರಾರ್ಥನೆಯ ವಿಷಯವಾಗಿಯೂ ದೇವರ ಪ್ರತಿ
ಕ್ರಿಯೆಯ ವಿಷಯವಾಗಿಯೂ ದೇವದರ್ಶಿಗಳ ಚರಿತ್ರೆ
ಯಲ್ಲಿ ಬರೆಯಲ್ಪಟ್ಟಿದೆ. ಮಾತ್ರವಲ್ಲದೆ ಮನಸ್ಸೆಯು
ದೇವರಿಗೆ ವಿರುದ್ಧವಾಗಿ ಮಾಡಿದ ಘೋರಕೃತ್ಯಗಳೂ
ಪಶ್ಚಾತ್ತಾಪ ಪಡುವ ಮೊದಲು ಎಲ್ಲೆಲ್ಲಿ ಅನ್ಯದೇವತೆಗಳಿಗ
ಪೂಜಾಸ್ಥಳಗಳನ್ನು ಮಾಡಿದ್ದನೆಂದೂ ಎಲ್ಲೆಲ್ಲಿ ಅಶೇರ
ಸ್ತಂಭಗಳನ್ನು ನೆಡಿಸಿದ್ದನೆಂದೂ ದೇವದರ್ಶಿಗಳ ಚರಿತ್ರೆ
ಯಲ್ಲಿ ಬರೆಯಲಾಗಿದೆ. [20]ಮನಸ್ಸೆಯು ಸತ್ತು ತನ್ನ
ಪೂರ್ವಿಕರ ಬಳಿಗೆ ಸೇರಿದಾಗ ಅವನ ಶವವನ್ನು ಅವನ
ಸ್ವಂತ ಅರಮನೆಯಲ್ಲಿ ಸಮಾಧಿಮಾಡಿದರು. ಮನಸ್ಸೆಯ
ಮಗನಾದ ಅಮೋನನು ಅವನ ಬದಲಿಗೆ ಅರಸನಾದನು.

## ಯೆಹೂದದ ಅರಸನಾದ ಅಮೋನ

[21]ಅಮೋನನು ಪಟ್ಟಕ್ಕೆ ಬರುವಾಗ ಇಪ್ಪತ್ತೆರಡು ವರುಷ
ಪ್ರಾಯದವನಾಗಿದ್ದನು. ಅವನು ಜೆರುಸಲೇಮಿನಲ್ಲಿ
ಎರಡು ವರ್ಷ ರಾಜ್ಯವನ್ನಾಳಿದನು. [22]ಅವನು ಯೆಹೋ
ವನ ದೃಷ್ಟಿಯಲ್ಲಿ ಕೆಟ್ಟದ್ದನ್ನೇ ಮಾಡಿದನು. ಮನಸ್ಸೆಯು
ಯೆಹೋವನಿಗೆ ಇಷ್ಟವಾದುದ್ದನ್ನು ಮಾಡಿದಂತೆ ಅವನು
ಮಾಡಲಿಲ್ಲ. ಅವನ ತಂದೆಯಾದ ಮನಸ್ಸೆಯು ಮಾಡಿದ
ಎರಕದ ಬೊಂಬೆಗಳಿಗೂ ಕೆತ್ತನೆ ಕೆಲಸದ ವಿಗ್ರಹಗಳಿಗೂ
ಅಡ್ಡಬಿದ್ದನು.

[23]ಮನಸ್ಸೆಯು ಯೆಹೋವನ ಮುಂದೆ ತನ್ನನ್ನು ತಗ್ಗಿಸಿ
ಕೊಂಡಂತೆ ಅಮೋನನು ತಗ್ಗಿಸಿಕೊಳ್ಳಲಿಲ್ಲ. ಅಮೋನನು
ಹೆಚ್ಚೆಚ್ಚಾಗಿ ಪಾಪಗಳನ್ನು ಮಾಡಿದನು. [24]ಅಮೋನನ
ಸೇವಕರು ಸಂಚುಮಾಡಿ ಅವನ ಅರಮನೆಯಲ್ಲಿಯೇ
ಅವನನ್ನು ಕೊಂದುಹಾಕಿದರು. [25]ಆದರೆ ಅರಸನಾದ
ಅಮೋನನಿಗೆ ವಿರೋಧವಾಗಿ ಎದ್ದ ಸೇವಕರನ್ನೆಲ್ಲಾ
ಯೆಹೂದದ ಜನರು ಸಂಹರಿಸಿದರು. ಅನಂತರ ಅಮೋ
ನನ ಮಗನಾದ ಯೋಷೀಯನನ್ನು ತಮ್ಮ ಅರಸನನ್ನಾಗಿ
ಆರಿಸಿದರು.

## ಯೆಹೂದದ ಅರಸನಾದ ಯೋಷೀಯ

34 ಯೋಷೀಯನು ಅರಸನಾದಾಗ ಎಂಟು ವರುಷ
ಪ್ರಾಯದವನಾಗಿದ್ದನು. ಅವನು ಮೂವ
ತ್ತೊಂದು ವರ್ಷದ ತನಕ ಜೆರುಸಲೇಮಿನಲ್ಲಿ ರಾಜ್ಯ
ಭಾರವನ್ನು ಮಾಡಿದನು. [2]ಯೋಷೀಯನು ಯೆಹೋ
ವನಿಗೆ ಮೆಚ್ಚಿಕೆಯಾದ ಕಾರ್ಯಗಳನ್ನೇ ಮಾಡಿದನು.
ಅವನು ತನ್ನ ಪೂರ್ವಿಕನಾದ ದಾವೀದನಂತೆ ದೇವರ
ದೃಷ್ಟಿಯಲ್ಲಿ ಒಳ್ಳೆಯವನಾಗಿದ್ದನು. ಅವನು ಒಳ್ಳೆಯ
ಕಾರ್ಯಗಳನ್ನು ಮಾಡುವುದನ್ನು ಬಿಟ್ಟುಬಿಡಲಿಲ್ಲ.
[3]ಅವನ ಆಳ್ವಿಕೆಯ ಎಂಟನೆಯ ವರುಷದಲ್ಲಿ ತನ್ನ ಪಿತೃ
ವಾದ ದಾವೀದನು ಅನುಸರಿಸಿದ್ದ ದೇವರನ್ನು ಅನುಸರಿ
ಸಿದನು. ಆಗ ಅವನು ಇನ್ನೂ ಎಳೆಯ ಪ್ರಾಯದವನಾ
ಗಿದ್ದನು. ಅವನು ಪಟ್ಟಕ್ಕೆ ಬಂದ ಹನ್ನೆರಡನೆಯ ವರುಷ
ದಲ್ಲಿ, ಜೆರುಸಲೇಮಿನಲ್ಲಿ ಮತ್ತು ಯೆಹೂದದಲ್ಲಿದ್ದ
ಎತ್ತರವಾದ ಸ್ಥಳಗಳನ್ನು, ಅಶೇರಸ್ತಂಭಗಳನ್ನೂ ಎರಕದ
ಮತ್ತು ಕೆತ್ತನೆಯ ವಿಗ್ರಹಗಳನ್ನೂ ನಾಶಮಾಡಿದನು.
[4]ಜನರು ಬಾಳ್ ದೇವರ ವಿಗ್ರಹಗಳನ್ನೂ ಯಜ್ಞವೇದಿಕೆ
ಗಳನ್ನೂ ಯೋಷೀಯನ ಮುಂದೆಯೇ ಕೆಡವಿ
ಹಾಕಿದರು. ಆಮೇಲೆ ಯೋಷೀಯನು ಉನ್ನತ
ಸ್ಥಳದಲ್ಲಿದ್ದ ಧೂಪವೇದಿಕೆಯನ್ನು ಕೆಡವಿ ಹಾಕಿ, ವಿಗ್ರಹ
ಗಳನ್ನೆಲ್ಲಾ ಒಡೆದು ಪುಡಿಮಾಡಿ ಬಾಳ್ ದೇವರ
ಪೂಜಾರಿಗಳ ಸಮಾಧಿಯ ಮೇಲೆ ಚೆಲ್ಲಿದನು. [5]ಯೋಷೀ
ಯನು ಬಾಳ್ ದೇವರ ವಿಗ್ರಹಗಳನ್ನೂ ಪೂಜಾರಿಯವರ
ಎಲುಬುಗಳನ್ನೂ ಅವರ ವೇದಿಕೆಗಳ ಮೇಲೆಯೇ
ಸುಟ್ಟುಬಿಟ್ಟನು. ಹೀಗೆ ಅವನು ಯೆಹೂದವನ್ನು ಮತ್ತು
ಜೆರುಸಲೇಮನ್ನು ಶುಚಿಗೊಳಿಸಿದನು ಮತ್ತು ಶುದ್ಧೀಕರಿಸಿ
ದನು. [6]ಅದೇ ಪ್ರಕಾರ ಎಫ್ರಾಯೀಮ್, ಮನಸ್ಸೆ, ಸಿಮೆ
ಯೋನ್ ಮತ್ತು ನಫ್ತಾಲಿ ಪ್ರಾಂತ್ಯಗಳ ಉದ್ದಕ್ಕೂ
ಮಾಡಿದನು. ಆ ಪಟ್ಟಣಗಳ ಸಮೀಪದಲ್ಲಿದ್ದ ಹಾಳು
ಬಿದ್ದವುಗಳಿಗೂ ಅವನು ಹಾಗೆಯೇ ಮಾಡಿದನು.
[7]ಅಲ್ಲಿಂದ ಮುಂದೆ ಇಸ್ರೇಲ್ ದೇಶದಲ್ಲೂ ಪೂಜಾ
ಸ್ಥಳಗಳನ್ನು ಕೆಡವಿ, ಅಶೇರಸ್ತಂಭಗಳನ್ನು ತುಂಡರಿಸಿ
ಎರಕದ ಕೆತ್ತನೆಯ ವಿಗ್ರಹಗಳನ್ನು ಪುಡಿಮಾಡಿ, ಧೂಪ
ವೇದಿಕೆಗಳನ್ನೆಲ್ಲಾ ನಾಶಮಾಡಿ ಜೆರುಸಲೇಮಿಗೆ ಹಿಂತಿ
ರುಗಿದನು.

[8]ತನ್ನ ಆಳ್ವಿಕೆಯ ಹದಿನೆಂಟನೆಯ ವರುಷದಲ್ಲಿ
ಯೋಷೀಯನು ಶಾಫಾನ್, ಮಾಸೇಯ ಮತ್ತು
ಯೋವಾಹ ಇವರನ್ನು ತನ್ನ ದೇವರಾದ ಯೆಹೋವನ
ಆಲಯವನ್ನು ಸರಿಪಡಿಸಲು ಕಳುಹಿಸಿದನು. ಶಾಫಾನನ
ತಂದೆಯ ಹೆಸರು ಅಚಲ್ಯ. ಮಾಸೇಯನು ನಗರದ
ನಾಯಕನಾಗಿದ್ದನು. ಯೋವಾಹನ ತಂದೆಯ ಹೆಸರು
ಯೆಹೋವಾಹಾಜ್. ಯೋವಾಹನು ರಾಜ ಲೇಖಕನೂ
ಆಗಿದ್ದನು. ಯೆಹೂದವನ್ನು ಮತ್ತು ದೇವಾಲಯವನ್ನು

ಶುಚಿಮಾಡುವ ಉದ್ದೇಶದಿಂದ ಯೋಷೀಯನು ದೇವಾ
ಲಯದ ದುರಸ್ತಿ ಕಾರ್ಯಕ್ಕೆ ಕೈ ಹಾಕಿದನು. 9ಜನರು
ದೇವಾಲಯದ ದುರಸ್ತಿಗಾಗಿ ಅರ್ಪಿಸಿದ್ದ ಕಾಣಿಕೆಯನ್ನು
ಅವರು ಮಹಾಯಾಜಕನಾದ ಹಿಲ್ಕೀಯನಿಗೆ ತಂದು
ಕೊಟ್ಟರು. ಮನಸ್ಸೆ, ಎಫ್ರಾಯೀಮ್ ಮತ್ತು ಇಸ್ರೇಲ್
ರಾಜ್ಯದ ಜನರು ಕೊಟ್ಟ ಕಾಣಿಕೆಯನ್ನು ದ್ವಾರಪಾಲಕ
ರಾದ ಲೇವಿಯರು ಒಟ್ಟುಗೂಡಿಸಿದರು. ಯೆಹೂದ,
ಬೆನ್ಯಾಮೀನ್ ಕುಲದವರೂ ಜೆರುಸಲೇಮಿನಲ್ಲಿ ವಾಸಿಸು
ವವರೂ ಕೊಟ್ಟ ಕಾಣಿಕೆಗಳನ್ನು ಅವರು ತೆಗೆದು
ಕೊಂಡರು. 10ದೇವಾಲಯದ ಕೆಲಸ ಮಾಡಿದವರಿಗೆ
ಲೇವಿಯರು ಹಣವನ್ನು ಕೊಟ್ಟರು. 11ಬಡಗಿಗಳಿಗೂ
ಮೇಸ್ತ್ರಿಗಳಿಗೂ ಈ ಹಣದಿಂದ ಸಂಬಳ ಕೊಟ್ಟರು;
ಬೇಕಾಗಿದ್ದ ಕಲ್ಲುಗಳನ್ನೂ ಮರದ ತೊಲೆಗಳನ್ನೂ ಇತರ
ವಸ್ತುಗಳನ್ನೂ ಕೊಂಡುಕೊಂಡರು. ಹಿಂದಿನಕಾಲದಲ್ಲಿ
ಯೆಹೂದದ ಅರಸರು ಯೆಹೋವನ ದೇವಾಲಯವನ್ನು
ಸರಿಪಡಿಸುವುದರ ಬಗ್ಗೆ ಹೆಚ್ಚು ಗಮನಕೊಟ್ಟಿರಲಿಲ್ಲ.
ಆದುದರಿಂದ ಕಟ್ಟಡವು ಹಳೆಯದಾಗಿ ಬೀಳುವ
ಸ್ಥಿತಿಯಲ್ಲಿತ್ತು. 12-13ಕೆಲಸಗಾರರು ನಂಬಿಗಸ್ತಿಕೆಯಿಂದ
ಕೆಲಸ ಮಾಡಿದರು. ಅವರ ಮೇಲ್ವಿಚಾರಕರು ಯಹತ್
ಮತ್ತು ಓಬದ್ಯ. ಇವರು ಲೇವಿಯರಾಗಿದ್ದರು ಮತ್ತು
ಮೆರಾರೀಯ ಸಂತತಿಯವರಾಗಿದ್ದರು. ಇತರ ಮೇಲ್ವಿ
ಚಾರಕರು ಯಾರೆಂದರೆ: ಜೆಕರ್ಯ ಮತ್ತು ಮೆಷು
ಲ್ಲಾಮ್. ಇವರು ಕೆಹಾತ್ಯನ ಸಂತತಿಯವರಾಗಿದ್ದರು.
ವಾದ್ಯಗಳನ್ನು ಬಾರಿಸುವದರಲ್ಲಿ ನಿಪುಣರಾದ ಲೇವಿ
ಯರೂ ಕೆಲಸದ ಮೇಲ್ವಿಚಾರಣೆ ಮಾಡುತ್ತಿದ್ದರು. ಇತರ
ಕೆಲವು ಲೇವಿಯರು, ಆ ಯೋಜನೆಯ ಅಧಿಕಾರಿ
ಗಳಾಗಿಯೂ ಕಾರ್ಯದರ್ಶಿಗಳಾಗಿಯೂ ದ್ವಾರಪಾಲಕ
ರಾಗಿಯೂ ನೇಮಕ ಮಾಡಲ್ಪಟ್ಟವರಾಗಿದ್ದರು.

## ಧರ್ಮಶಾಸ್ತ್ರವು ದೊರೆತದ್ದು

14ದೇವಾಲಯದೊಳಗೆ ಶೇಖರಿಸಿಟ್ಟಿದ್ದ ಹಣವನ್ನು
ಲೇವಿಯರು ತಂದುಕೊಟ್ಟರು. ಅದೇ ಸಮಯದಲ್ಲಿ
ಮಹಾಯಾಜಕನಾದ ಹಿಲ್ಕೀಯನು ಮೋಶೆಯ ಧರ್ಮ
ಶಾಸ್ತ್ರದ ಪ್ರತಿಯೊಂದನ್ನು ದೇವಾಲಯದಲ್ಲಿ ಕಂಡನು.
15ಕಾರ್ಯದರ್ಶಿಯಾದ
ಶಾಫಾನನಿಗೆ,‘‘ದೇವಾಲಯದಲ್ಲಿ ನನಗೆ ಯೆಹೋವನ
ಧರ್ಮಶಾಸ್ತ್ರವು ಸಿಕ್ಕಿತು’’ ಎಂದು ಹೇಳಿ ಅದನ್ನು
ಕೊಟ್ಟನು. 16ಶಾಫಾನನು ಅದನ್ನು ಅರಸನಾದ ಯೋಷೀ
ಯನಿಗೆ ತಂದು ಅದು ದೊರೆತ ವಿಷಯವನ್ನು ತಿಳಿಸಿದನು.
‘‘ನೀನು ಹೇಳಿದ ಪ್ರಕಾರವೇ ನಿನ್ನ ಸೇವಕರು ಮಾಡು
ತ್ತಿದ್ದಾರೆ. 17ದೇವಾಲಯದೊಳಗಿದ್ದ ಹಣವನ್ನು ಅವರು
ತೆಗೆದು ಅದನ್ನು ಕೆಲಸಗಾರರಿಗೂ ಮೇಲ್ವಿಚಾರಕರಿಗೂ
ಕೊಡುತ್ತಿದ್ದಾರೆ. ಯಾಜಕನಾದ ಹಿಲ್ಕೀಯನು ಈ
ಪುಸ್ತಕವನ್ನು ನನಗೆ ಕೊಟ್ಟನು’’ 18ಎಂದು ಹೇಳಿ ಆ
ಪುಸ್ತಕವನ್ನು ಓದತೊಡಗಿದನು. ಅವನು ಅರಸನ ಮುಂದೆ
ನಿಂತುಕೊಂಡು ಓದುತ್ತಿರಲು 19ಅರಸನಾದ ಯೋಷೀ
ಯನು ಧರ್ಮಶಾಸ್ತ್ರದ ಮಾತುಗಳನ್ನು ಕೇಳಿ ತನ್ನ
ಬಟ್ಟೆಗಳನ್ನು ಹರಿದುಕೊಂಡನು. 20ಆಗ ಅರಸನು
ಹಿಲ್ಕೀಯ, ಶಾಫಾನನ ಮಗನಾದ ಅಹೀಕಾಮ್,
ಮೀಕನ ಮಗನಾದ ಅಬ್ದೋನ್, ಕಾರ್ಯದರ್ಶಿಯಾದ
ಶಾಫಾನ್ ಮತ್ತು ಸೇವಕನಾದ ಅಸಾಯ ಇವರಿಗೆ
ಹೇಳಿದ್ದೇನಂದರೆ, 21‘‘ಹೋಗಿ ನನ್ನ ವಿಷಯವಾಗಿಯೂ
ಇಸ್ರೇಲ್ ಮತ್ತು ಯೆಹೂದದಲ್ಲಿರುವ ಜನರಿಗೋಸ್ಕರ
ವಾಗಿಯೂ ಯೆಹೋವನಲ್ಲಿ ವಿಚಾರಿಸಿರಿ. ಯೆಹೋವನು
ನಮ್ಮ ಮೇಲೆ ಕೋಪಗೊಂಡಿದ್ದಾನೆ. ಯಾಕಂದರೆ ನಮ್ಮ
ಪೂರ್ವಿಕರು ಆತನ ಧರ್ಮಶಾಸ್ತ್ರದ ಪ್ರಕಾರ ನಡೆದು
ಕೊಂಡಿಲ್ಲ. ಈ ಪುಸ್ತಕದಲ್ಲಿ ಮಾಡಬೇಕೆಂದು ಹೇಳಿದ್ದನ್ನು
ಅವರು ಮಾಡದೆ ಹೋಗಿದ್ದಾರೆ’’ ಎಂದು ಹೇಳಿದನು.

22ಹಿಲ್ಕೀಯನೂ ಅರಸನ ಸೇವಕರೂ ಪ್ರವಾದಿನಿ
ಯಾಗಿದ್ದ ಹುಲ್ದಳ ಬಳಿಗೆ ಹೋದರು. ಆಕೆ ತೊಕ್ಹತನ
ಮಗನಾದ ಶಲ್ಲೂಮನ ಹೆಂಡತಿಯಾಗಿದ್ದಳು. ತೊಕ್ಹತನು
ಹಸ್ರನ ಮಗ. ಇವನು ಅರಸನ ಬಟ್ಟೆಬರೆಗಳ ಮುಖ್ಯಸ್ತ
ನಾಗಿದ್ದನು. ಹುಲ್ದಳು ಜೆರುಸಲೇಮಿನ ಹೊಸ ಬಡಾವಣೆ
ಯಲ್ಲಿ ವಾಸ ಮಾಡುತ್ತಿದ್ದಳು. ಅರಸನು ಹೇಳಿದ್ದನ್ನೆಲ್ಲಾ
ಸೇವಕರು ಆಕೆಗೆ ತಿಳಿಸಿದರು. 23ಹುಲ್ದಳು ಅವರಿಗೆ,
‘‘ಅರಸನಾದ ಯೋಷೀಯನಿಗೆ ಹೋಗಿ ತಿಳಿಸಿರಿ.
24ಯೆಹೋವನು ಹೇಳುವುದೇನೆಂದರೆ, ‘ನಾನು ಈ
ಸ್ಥಳಕ್ಕೂ ಇಲ್ಲಿ ವಾಸಿಸುವವರಿಗೂ ಸಂಕಟವನ್ನು ಬರ
ಮಾಡುವೆನು. ಯೆಹೂದ ದೇಶದ ಅರಸನ ಮುಂದೆ
ಓದಿದಂಥ ಪುಸ್ತಕದಲ್ಲಿ ಬರೆಯಿಸಿದ ಎಲ್ಲಾ ಶಾಪಗಳನ್ನು
ನಾನು ಬರಮಾಡುವೆನು. 25ಯಾಕಂದರೆ ಜನರು ನನ್ನನ್ನು
ತೊರೆದು ಸುಳ್ಳುದೇವರುಗಳಿಗೆ ಧೂಪ ಹಾಕಿದರು.
ಅವರು ತಮ್ಮ ಕೆಟ್ಟಕಾರ್ಯಗಳಿಂದ ನನ್ನನ್ನು ರೇಗಿಸಿ
ದ್ದಾರೆ. ಆದುದರಿಂದ ನನ್ನ ಕೋಪಾಗ್ನಿಯನ್ನು ಈ ಸ್ಥಳದ
ಮೇಲೆ ಸುರಿಸುವೆನು. ಉರಿಯುವ ಬೆಂಕಿಯಂತಿರುವ
ನನ್ನ ಕೋಪಾಗ್ನಿಯನ್ನು ಆರಿಸಲು ಸಾಧ್ಯವಿಲ್ಲ.

26‘‘ಆದರೆ ಯೆಹೋವನನ್ನು ವಿಚಾರಿಸಲು ನಿಮ್ಮನ್ನು
ಕಳುಹಿಸಿದ ಯೆಹೂದದ ಅರಸನಾದ ಯೋಷೀಯನಿಗೆ
ಹೀಗೆ ಹೇಳಿರಿ: ‘ನೀನು ಸ್ವಲ್ಪಕಾಲದ ಹಿಂದೆ ಕೇಳಿದ
ವಿಷಯಗಳ ಬಗ್ಗೆ ಇಸ್ರೇಲಿನ ಯೆಹೋವನು ಹೇಳುವದೇ
ನಂದರೆ, 27‘‘ಯೋಷೀಯನೇ, ನೀನು ನನ್ನ ಮಾತು
ಗಳನ್ನು ಕೇಳಿದಾಗ ನನ್ನ ಮುಂದೆ ತಗ್ಗಿಸಿಕೊಂಡು
ಪಶ್ಚಾತ್ತಾಪಪಟ್ಟು ನಿನ್ನ ಬಟ್ಟೆಗಳನ್ನು ಹರಿದುಕೊಂಡೆ. ನನ್ನ
ಮುಂದೆ ನೀನು ಗೋಳಾಡಿದೆ. ನಿನ್ನ ಹೃದಯವು
ಮೃದುವಾದದ್ದರಿಂದ, 28ನಿನ್ನನ್ನು ನಿನ್ನ ಪೂರ್ವಿಕರ ಬಳಿಗೆ
ತೆಗೆದುಕೊಳ್ಳುತ್ತೇನೆ. ನಿನ್ನ ಪ್ರಾರ್ಥನೆಯನ್ನು ನಾನು

ಕೇಳಿದೆ. ನೀನು ನಿನ್ನ ಸಮಾಧಿಗೆ ಸಮಾಧಾನದಿಂದ
ಸೇರುವೆ. ನಾನು ಈ ಸ್ಥಳದ ಮೇಲೂ ಈ ಸ್ಥಳದಲ್ಲಿ
ವಾಸಿಸುವವರ ಮೇಲೂ ತರುವ ಸಂಕಟಗಳಲ್ಲಿ ನೀನು
ಒಂದಾನ್ನಾದರೂ ಅನುಭವಿಸುವದಿಲ್ಲ.'' ಹಿಲ್ಕೀಯನೂ
ಅರಸನ ಸೇವಕರೂ ಈ ಸಂದೇಶವನ್ನು ಅರಸನಾದ
ಯೋಷೀಯನಿಗೆ ತಂದರು.

29ಅರಸನಾದ ಯೋಷೀಯನು ಯೆಹೂದದ ಮತ್ತು
ಜೆರುಸಲೇಮಿನ ಪ್ರಧಾನರನ್ನು ತನ್ನ ಬಳಿಗೆ ಕರೆಯಿಸಿ
ದನು. 30ಅರಸನೂ ಯೆಹೂದದಲ್ಲಿ ವಾಸಿಸುವ ಜನರೂ
ಜೆರುಸಲೇಮಿನಲ್ಲಿ ವಾಸಿಸುವ ಜನರೂ ಯಾಜಕರೂ
ಲೇವಿಯರೂ ದೊಡ್ಡವರು ಸಣ್ಣವರು ಎಂಬ ವ್ಯತ್ಯಾಸ
ವಿಲ್ಲದೆ ತಮ್ಮ ಅರಸನೊಂದಿಗೆ ಇದ್ದರು. ಯೋಷೀಯನು
ಧರ್ಮಶಾಸ್ತ್ರವನ್ನು ಜನರಿಗೆ ಓದಿ ತಿಳಿಸಿದನು. ಆ ಪುಸ್ತಕವು
ದೇವಾಲಯದಲ್ಲಿ ಸಿಕ್ಕಿತ್ತು. 31ಆಮೇಲೆ ಅರಸನು ತನ್ನ
ಸ್ಥಳದಲ್ಲಿ ಎದ್ದುನಿಂತು, ಯೆಹೋವನ ಎಲ್ಲಾ ಕಟ್ಟಳೆ
ಗಳಿಗೆ ವಿಧೇಯನಾಗಿ ಆತನನ್ನು ಪೂರ್ಣಹೃದಯ
ದಿಂದಲೂ ಪೂರ್ಣಮನಸ್ಸಿನಿಂದಲೂ ಅನುಸರಿಸುವು
ದಾಗಿ ಪ್ರಮಾಣಮಾಡಿದನು. 32ಆಮೇಲೆ ಎಲ್ಲಾ
ಜೆರುಸಲೇಮಿನವರಿಂದಲೂ ಮತ್ತು ಬೆನ್ಯಾಮೀನ್ಯ
ರಿಂದಲೂ ಪ್ರಮಾಣಮಾಡಿಸಿದನು. ತಮ್ಮ ಪೂರ್ವಿಕರು
ವಿಧೇಯರಾಗಿದ್ದ ದೇವರಿಗೆ ತಾವೂ ವಿಧೇಯರಾಗಿರುವು
ದಾಗಿ ಅವರು ಪ್ರಮಾಣ ಮಾಡಿದರು. 33ಇಸ್ರೇಲ್ ಜನರ
ಬಳಿ ನಾನಾ ಜನಾಂಗದವರ ವಿಗ್ರಹಗಳಿದ್ದವು. ಆದರೆ
ಯೋಷೀಯನು ಆ ವಿಗ್ರಹಗಳನ್ನೆಲ್ಲಾ ನಾಶಮಾಡಿದನು.
ಇಸ್ರೇಲರು ದೇವರಾದ ಯೆಹೋವನ ಸೇವೆಮಾಡುವಂತೆ
ಯೋಷೀಯನು ಮಾಡಿದನು. ಯೋಷೀಯನು ಬದುಕಿ
ದ್ದಷ್ಟು ಕಾಲ ಇಸ್ರೇಲರು ತಮ್ಮ ಪೂರ್ವಿಕರ ದೇವರಾದ
ಯೆಹೋವನ ಸೇವೆಮಾಡಿದರು.

### ಯೋಷೀಯನು ಪಸ್ಕಹಬ್ಬವನ್ನು ಆಚರಿಸಿದ್ದು

35 ಅರಸನಾದ ಯೋಷೀಯನು ಯೆಹೋವನಿಗೆ
ಪಸ್ಕಹಬ್ಬವನ್ನು ಜೆರುಸಲೇಮಿನಲ್ಲಿ ಆಚರಿಸಿ
ದನು. ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿವಸ
ದಲ್ಲಿ ಪಸ್ಕದ ಕುರಿಮರಿಯು ವಧಿಸಲ್ಪಟ್ಟಿತ್ತು. 2ದೇವಾ
ಲಯದಲ್ಲಿ ಸೇವೆಮಾಡುತ್ತಿದ್ದ ಯಾಜಕರನ್ನು ಯೋಷೀ
ಯನು ಪ್ರೋತ್ಸಾಹಿಸಿ ವಿವಿಧ ಕೆಲಸಕಾರ್ಯಗಳಿಗೆ
ಯಾಜಕರನ್ನು ಆರಿಸಿದನು. 3ಎಲ್ಲಾ ಇಸ್ರೇಲರಿಗೆ ಉಪ
ದೇಶಿಸತಕ್ಕವರೂ ಯೆಹೋವನಿಗೆ ಪ್ರತಿಷ್ಠಿತರೂ ಆದ
ಲೇವಿಯರಿಗೆ ಯೋಷೀಯನು, ‘‘ದೇವರ ಒಡಂಬ
ಡಿಕೆಯ ಪೆಟ್ಟಿಗೆಯನ್ನು ಸೊಲೊಮೋನನು ಕಟ್ಟಿದ ದೇವಾ
ಲಯದೊಳಗೆ ಇಡಿರಿ. ಸೊಲೊಮೋನನು ಇಸ್ರೇಲಿನ
ರಾಜನಾದ ದಾವೀದನ ಮಗ. ಆ ಪೆಟ್ಟಿಗೆಯನ್ನು ನಿಮ್ಮ
ಹೆಗಲಿನ ಮೇಲೆ ಹೊತ್ತುಕೊಂಡು ಸ್ಥಳದಿಂದ ಸ್ಥಳಕ್ಕೆ
ಹೋಗಬೇಡಿ; ನಿಮ್ಮ ದೇವರಾದ ಯೆಹೋವನ
ಸೇವೆಮಾಡಿರಿ; ದೇವಜನರಾದ ಇಸ್ರೇಲರ ಸೇವೆಮಾಡಿರಿ.
4ನಿಮ್ಮ ನಿಮ್ಮ ವಂಶಕ್ರಮದ ಮೇರೆಗೆ ದೇವಾಲಯ
ದೊಳಗೆ ಸೇವೆಮಾಡಲು ನಿಮ್ಮನ್ನು ಸಿದ್ಧಮಾಡಿಕೊಳ್ಳಿರಿ.
ಅರಸನಾದ ದಾವೀದನೂ ಅವನ ಮಗನಾದ ಸೊಲೊ
ಮೋನನೂ ನಿಮಗೆ ಕೊಟ್ಟ ಸೇವಾ ಜವಾಬ್ದಾರಿಕೆಗಳನ್ನು
ನಡಿಸಿರಿ. 5ಪವಿತ್ರಸ್ಥಳದಲ್ಲಿ ಲೇವಿಯರೊಂದಿಗೆ ನಿಲ್ಲಿರಿ
ಮತ್ತು ಬೇರೆ ಕುಲಗಳ ಜನರಿಗೂ ಸಹಾಯ ಮಾಡು
ವುದಕ್ಕಾಗಿ ಹೀಗೆ ಮಾಡಿರಿ. 6ಪಸ್ಕದ ಕುರಿಮರಿಯನ್ನು
ವಧಿಸಿ ಯೆಹೋವನಿಗಾಗಿ ನಿಮ್ಮನ್ನು ಶುದ್ಧಮಾಡಿ
ಕೊಳ್ಳಿರಿ. ನಿಮ್ಮ ಸೋದರರಾದ ಇಸ್ರೇಲರಿಗೆ ಕುರಿಮರಿ
ಯನ್ನು ಸಿದ್ಧಮಾಡಿರಿ. ಯೆಹೋವನು ನಮಗೆ ಆಜ್ಞಾಪಿ
ಸಿದ್ದನ್ನೆಲ್ಲಾ ನೆರವೇರಿಸಿರಿ. ಆತನು ಮೋಶೆಯ ಮೂಲಕ
ನಮಗೆ ಈ ವಿಧಿನಿಯಮಗಳನ್ನು ಅನುಗ್ರಹಿಸಿದ್ದಾನೆ''
ಎಂದು ಹೇಳಿದನು.

7ಇಸ್ರೇಲರಿಗೆ ಅರಸನಾದ ಯೋಷೀಯನು ಪಸ್ಕ
ಹಬ್ಬದ ಯಜ್ಞಗಳಿಗಾಗಿ ಮೂವತ್ತು ಸಾವಿರ ಕುರಿ
ಮರಿಗಳನ್ನು ಕೊಟ್ಟನು. ಇದರ ಮೇಲೆ ಮೂರು ಸಾವಿರ
ಪಶುಗಳನ್ನು ಅವನು ಜನರಿಗೆ ಕೊಟ್ಟನು. ಈ ಪ್ರಾಣಿ
ಗಳೆಲ್ಲಾ ಅರಸನಾದ ಯೋಷೀಯನದೇ ಆಗಿದ್ದವು.
8ಯೋಷೀಯನ ಆಡಳಿತಾಧಿಕಾರಿಗಳೂ ಯಾಜಕರಿಗೆ,
ಲೇವಿಯರಿಗೆ ಮತ್ತು ಜನರಿಗೆ ಧಾರಾಳವಾಗಿ ಪಶುಗಳನ್ನು
ಕೊಟ್ಟರು. ಮಹಾಯಾಜಕನಾದ ಹಿಲ್ಕೀಯ, ಜೆಕರ್ಯ
ಮತ್ತು ಯೆಹೀಯೇಲನು ದೇವಾಲಯದ ಮುಖ್ಯಸ್ತರಾಗಿ
ದ್ದರು. ಅವರು ಯಾಜಕರಿಗೆ ಎರಡು ಸಾವಿರದ ಆರು
ನೂರು ಕುರಿಗಳನ್ನು ಮತ್ತು ಆಡುಗಳನ್ನು, ಮೂನ್ನೂರು
ಹೋರಿಗಳನ್ನು ಪಸ್ಕಹಬ್ಬದ ಯಜ್ಞಗಳಿಗಾಗಿ ಕೊಟ್ಟರು.
9ಕೋನನ್ಯ, ಸೆಮಾಯ, ನೆತನೇಲ್ ಮತ್ತು ಇವರ
ಸಹೋದರರು ಮತ್ತು ಹಷಲ್ಯ, ಯೆಗೀಯೇಲ್,
ಯೋಜಾಬಾದ್ ಇವರು ಐನೂರು ಕುರಿಗಳನ್ನು ಮತ್ತು
ಆಡುಗಳನ್ನು ಐನೂರು ಹೋರಿಗಳನ್ನು ಪಸ್ಕಹಬ್ಬದ
ಯಜ್ಞಕ್ಕಾಗಿ ಲೇವಿಯರಿಗೆ ಕೊಟ್ಟರು. ಇವರು ಲೇವಿ
ಯರ ನಾಯಕರಾಗಿದ್ದರು.

10ಪಸ್ಕಹಬ್ಬದ ಆಚರಣೆಗಳಿಗೆ ಎಲ್ಲವೂ ಸಿದ್ಧವಾದಾಗ
ಯಾಜಕರೂ ಲೇವಿಯರೂ ತಮ್ಮ ನೇಮಿತ ಸ್ಥಳಗಳಲ್ಲಿ
ನಿಂತರು. ಇದು ಅರಸನ ಆಜ್ಞೆಯಾಗಿತ್ತು. 11ಪಸ್ಕದ ಪಶು
ಗಳನ್ನು ವಧಿಸಿದ ಬಳಿಕ ಲೇವಿಯರು ಅದರ ಚರ್ಮ
ಸುಲಿದು ಅದರ ರಕ್ತವನ್ನು ಯಾಜಕರಿಗೆ ಕೊಟ್ಟರು. ಆ
ರಕ್ತವನ್ನು ಯಾಜಕರು ವೇದಿಕೆಯ ಮೇಲೆ ಚಿಮಿಕಿ
ಸಿದರು. 12ಆಮೇಲೆ ಬೇರೆ ಬೇರೆ ಕುಲಗಳವರಿಗೆ
ಸರ್ವಾಂಗ ಹೋಮವನ್ನರ್ಪಿಸಲು ಪಶುಗಳನ್ನು
ಕೊಟ್ಟರು. ಈ ಸರ್ವಾಂಗಹೋಮವು ಮೋಶೆಯ
ಕಟ್ಟಳೆಗನುಸಾರವಾಗಿ ನಡೆಯಿತು. 13ಲೇವಿಯರು ಪಸ್ಕದ

ಪಶುಗಳ ಮಾಂಸವನ್ನು ಕಟ್ಟಳೆಯ ಪ್ರಕಾರ ಬೆಂಕಿಯಲ್ಲಿ
ಸುಟ್ಟರು. ಪರಿಶುದ್ಧ ಯಜ್ಞದ ಮಾಂಸವನ್ನು ಪಾತ್ರೆಗಳಲ್ಲಿ
ಮತ್ತು ಹಂಡೆಗಳಲ್ಲಿ ಬೇಯಿಸಿದರು. ಆಮೇಲೆ
ಅವುಗಳನ್ನು ಜನರಿಗೆ ಹಂಚಿದರು. 14ಬಳಿಕ ಲೇವಿಯರು
ತಮಗಾಗಿಯೂ ಆರೋನನ ಸಂತತಿಯವರಾದ ಯಾಜಕ
ರಿಗಾಗಿಯೂ ಮಾಂಸವನ್ನು ಸಿದ್ಧಮಾಡಿದರು. ಆ
ಯಾಜಕರು ರಾತ್ರಿ ತನಕವೂ ಕೆಲಸದಲ್ಲಿ ನಿರತರಾಗಿ
ದ್ದರು; ಸರ್ವಾಂಗಹೋಮಗಳನ್ನೂ ಪಶುಗಳ ಕೊಬ್ಬನ್ನೂ
ಹೋಮಮಾಡುತ್ತಾ ಇದ್ದರು. 15ಆಸಾಫನ ಕುಟುಂಬ
ದವರಾದ ಲೇವಿಗಾಯಕರು ದಾವೀದನಿಂದ ನೇಮಕ
ಗೊಂಡಿದ್ದ ಸ್ಥಳದಲ್ಲಿ ನಿಂತುಕೊಂಡರು. ಅವರು
ಯಾರೆಂದರೆ: ಆಸಾಫ್,ಹೇಮಾನ್ ಮತ್ತು ಅರಸನ
ಪ್ರವಾದಿಯಾಗಿದ್ದ ಯೆದೂತೂನ್. ದ್ವಾರಪಾಲಕರು
ತಮ್ಮ ತಮ್ಮ ಸ್ಥಳಗಳಲ್ಲಿಯೇ ನಿಂತಿದ್ದರು. ಅವರು ತಮ್ಮ
ಸ್ಥಳಗಳನ್ನು ಬಿಟ್ಟುಹೋಗುವ ಅಗತ್ಯವಿರಲಿಲ್ಲ ಯಾಕಂ
ದರೆ ಪಸ್ಕದ ಯಜ್ಞಗಳನ್ನು ಅವರ ಸೋದರರಾದ
ಲೇವಿಯರು ಅವರಿಗಾಗಿ ಮಾಡಿದರು.

16ಹೀಗೆ ಅರಸನಾದ ಯೋಷೀಯನ ಆಜ್ಞೆಗನುಸಾರ
ವಾಗಿ ಪಸ್ಕಹಬ್ಬದ ಪ್ರತಿಯೊಂದು ವಿಷಯವು ನಡೆಯಿತು.
ಸರ್ವಾಂಗಹೋಮವನ್ನು ಯಜ್ಞವೇದಿಕೆಯಲ್ಲಿ ಸಮರ್ಪಿ
ಸಿದರು. 17ಇಸ್ರೇಲಿನ ಜನರೂ ಅಲ್ಲಿ ಸೇರಿಬಂದವರೂ
ಪಸ್ಕಹಬ್ಬವನ್ನು ಮತ್ತು ಹುಳಿ ಇಲ್ಲದ ರೊಟ್ಟಿಯ
ಹಬ್ಬವನ್ನು ಏಳು ದಿನಗಳವರೆಗೆ ಆಚರಿಸಿದರು. 18ಪ್ರವಾ
ದಿಯಾದ ಸಮುವೇಲನ ಕಾಲದಿಂದ ಈ ರೀತಿಯಾಗಿ
ಪಸ್ಕಹಬ್ಬವನ್ನು ಎಂದೂ ಆಚರಿಸಿರಲಿಲ್ಲ. ಇಸ್ರೇಲರ
ಅರಸರಲ್ಲಿ ಯಾರೂ ಈ ರೀತಿಯಾಗಿ ಹಬ್ಬ ಆಚರಿಸಿರ
ಲಿಲ್ಲ. ಅರಸನಾದ ಯೋಷೀಯ, ಯಾಜಕರು, ಲೇವಿ
ಯರು, ಯೆಹೂದದ ಜನರು, ಇಸ್ರೇಲಿನಿಂದ ಬಂದ
ಜನರು ಮತ್ತು ಜೆರುಸಲೇಮಿನ ಜನರು ವಿಶೇಷ
ರೀತಿಯಲ್ಲಿ ಪಸ್ಕಹಬ್ಬವನ್ನು ಆಚರಿಸಿದರು. 19ಇದು
ಯೋಷೀಯನ ಆಳ್ವಿಕೆಯ ಹದಿನೆಂಟನೆಯ ವರುಷದಲ್ಲಿ
ನಡೆಯಿತು.

### ಯೋಷೀಯನ ಮರಣ

20ದೇವಾಲಯಕ್ಕಾಗಿ ಎಲ್ಲಾ ಒಳ್ಳೆಯ ಕಾರ್ಯಗಳನ್ನು
ಯೋಷೀಯನು ಮಾಡಿದನು. ಸ್ವಲ್ಪಕಾಲವಾದ ಬಳಿಕ
ಈಜಿಪ್ಟಿನ ಅರಸನಾದ ನೆಕೋ ಯೂಫ್ರೇಟೀಸ್ ನದಿಯ
ಬಳಿಯಲ್ಲಿದ್ದ ಕರ್ಕೆಮೀಷ್ ಪಟ್ಟಣದ ಮೇಲೆ ಯುದ್ಧ
ಮಾಡಲು ಹೊರಟನು. ಅರಸನಾದ ಯೋಷೀಯನು
ನೆಕೋನ ಮೇಲೆ ಯುದ್ಧಮಾಡಲು ಹೊರಟನು.
21ಆದರೆ ನೆಕೋ ಯೋಷೀಯನಿಗೆ ಸಂದೇಶವನ್ನು
ಕಳುಹಿಸಿ ಅದರಲ್ಲಿ, ‘‘ಅರಸನಾದ ಯೋಷೀಯನೇ,
ನಾನು ನಿನಗೆ ವಿರುದ್ಧವಾಗಿ ಬರಲಿಲ್ಲ. ಆದುದರಿಂದ
ನೀನು ಯುದ್ಧಕ್ಕೆ ಕೈಹಾಕಬೇಡ. ನಾನು ನನ್ನ ವೈರಿಗಳ
ಮೇಲೆ ಯುದ್ಧಮಾಡಲು ಬಂದಿದ್ದೇನೆ. ಬೇಗನೆ ಯುದ್ಧ
ಮಾಡಲು ದೇವರು ನನ್ನನ್ನು ಅವಸರಪಡಿಸುತ್ತಿದ್ದಾನೆ.
ದೇವರು ನಿನ್ನೊಂದಿಗಿದ್ದಾನೆ. ಆದುದರಿಂದ ನನಗೆ
ತೊಂದರೆ ಕೊಡಬೇಡ. ನೀನು ನನ್ನ ಮೇಲೆ ಯುದ್ಧ
ಮಾಡಿದರೆ ದೇವರು ನಿನ್ನನ್ನು ನಾಶಮಾಡುವನು’’ ಎಂದು
ಹೇಳಿದನು. 22ಆದರೆ ಅರಸನಾದ ಯೋಷೀಯನು
ಹಿಂದಕ್ಕೆ ಹೋಗಲಿಲ್ಲ. ಅವನು ನೆಕೋನನ್ನು ಎದುರಿಸಲು
ನಿರ್ಧರಿಸಿದನು. ತನ್ನ ವೇಷ ಬದಲಾಯಿಸಿ ಯುದ್ಧಕ್ಕೆ
ಹೋದನು. ದೇವರ ಅಪ್ಪಣೆಯ ಬಗ್ಗೆ ನೆಕೋ ಹೇಳಿದ್ದನ್ನು
ಕೇಳಲು ಯೋಷೀಯನು ನಿರಾಕರಿಸಿ ಮೆಗಿದ್ದೋ ಕಣಿವೆ
ಯಲ್ಲಿ ಯುದ್ಧಕ್ಕೆ ಹೊರಟನು. 23ರಣರಂಗದಲ್ಲಿ ಅರಸ
ನಾದ ಯೋಷೀಯನಿಗೆ ಬಾಣಗಳು ತಾಗಿದ್ದವು. ಆಗ ತನ್ನ
ಸೇವಕರಿಗೆ, ‘‘ನನ್ನನ್ನು ಇಲ್ಲಿಂದ ಕೊಂಡೊಯ್ಯಿರಿ. ನಾನು
ತೀವ್ರವಾಗಿ ಗಾಯಗೊಂಡಿದ್ದೇನೆ’’ ಅಂದನು.

24ಆಗ ಸೇವಕರು ಯೋಷೀಯನನ್ನು ಅವನಿದ್ದ ರಥ
ದಿಂದ ತೆಗೆದು ಅವನ ಜೊತೆಯಲ್ಲಿ ತಂದಿದ್ದ ಇನ್ನೊಂದು
ರಥದಲ್ಲಿ ಹಾಕಿ ರಣರಂಗದಿಂದ ನೇರವಾಗಿ ಜೆರುಸ
ಲೇಮಿಗೆ ಕೊಂಡೊಯ್ದರು. ಅಲ್ಲಿ ಅವನು ಸತ್ತನು. ಅವನ
ಪೂರ್ವಿಕರ ಬಳಿಯಲ್ಲಿ ಅವನನ್ನು ಸಮಾಧಿ ಮಾಡಿದರು.
ಅವನು ಸತ್ತದ್ದನ್ನು ಕೇಳಿ ಯೆಹೂದದ ಮತ್ತು ಜೆರುಸ
ಲೇಮಿನ ಜನರು ತುಂಬಾ ಶೋಕಿಸಿದರು. 25ಯೆರೆ
ಮೀಯನು ಅವನ ಬಗ್ಗೆ ಶೋಕಗೀತೆಗಳನ್ನು ರಚಿಸಿ
ಹಾಡಿದನು. ಆ ಗೀತೆಗಳನ್ನು ಗಂಡಸರು ಹೆಂಗಸರು
ಈಗಲೂ ಹಾಡುತ್ತಾರೆ. ಯೋಷೀಯನ ಕುರಿತು
ದುಃಖದ ಹಾಡನ್ನು ಹಾಡುವದು ಅವರಿಗೆ ರೂಢಿಯಾ
ಗಿದೆ. ಆ ಗೀತೆಗಳನ್ನು ಮರಣದ ಹಾಡಿನ ಪುಸ್ತಕದಲ್ಲಿ
ಬರೆಯಲಾಗಿದೆ.

26-27ಯೋಷೀಯನು ಅರಸನಾಗಿದ್ದಾಗ ಮಾಡಿದ
ಇತರ ಕಾರ್ಯಗಳನ್ನೂ ಅವನ ಆಳ್ವಿಕೆಯ ಪ್ರಾರಂಭ
ದಿಂದ ಕೊನೆಯ ತನಕದ ವಿಷಯಗಳನ್ನೂ ಇಸ್ರೇಲಿನ
ಮತ್ತು ಯೆಹೂದದ ಅರಸರ ಗ್ರಂಥದಲ್ಲಿ ಬರೆಯ
ಲಾಗಿದೆ. ದೇವರ ಮೇಲೆ ಯೋಷೀಯನಿಗಿದ್ದ ಭಕ್ತಿ
ಯನ್ನೂ ಅವನು ಯೆಹೋವನಿಗೆ ಹೇಗೆ ವಿಧೇಯ
ನಾಗಿದ್ದನೆಂಬುದನ್ನೂ ಆ ಗ್ರಂಥದಲ್ಲಿ ವಿವರಿಸಿಯದೆ.

### ಯೆಹೂದದ ಅರಸನಾದ ಯೆಹೋವಾಹಾಜ

36 ಯೆಹೂದದ ಜನರು ಯೆಹೋವಾಹಾಜನನ್ನು
ತಮ್ಮ ಹೊಸ ಅರಸನನ್ನಾಗಿ ಜೆರುಸಲೇಮಿನಲ್ಲಿ
ಆರಿಸಿದರು. ಯೆಹೋವಾಹಾಜನು ಯೋಷೀಯನ
ಮಗನು. 2ಅವನು ತನ್ನ ಇಪ್ಪತ್ತ ಮೂರನೆ ವಯಸ್ಸಿನಲ್ಲಿ
ಪಟ್ಟಕ್ಕೆ ಬಂದನು. ಅವನು ಜೆರುಸಲೇಮಿನಲ್ಲಿ ಮೂರು
ತಿಂಗಳ ಕಾಲ ಆಳಿದನು. 3ಆ ಬಳಿಕ ಈಜಿಪ್ಟಿನ ನೆಕೋ

ಯೆಹೋವಾಹಾಜನನ್ನು ಕೈದಿಯನ್ನಾಗಿ ಮಾಡಿದನು.
ಯೆಹೂದದ ಜನರು ತನಗೆ ಮೂರು ಸಾವಿರದ
ನಾನೂರು ಕಿಲೊ.ಗ್ರಾಂ. ಬೆಳ್ಳಿಯನ್ನೂ ಮೂವತ್ತನಾಲ್ಕು
ಕಿಲೋ.ಗ್ರಾಂ. ಬಂಗಾರವನ್ನೂ ಕೊಡಲು ಆಜ್ಞಾಪಿಸಿ
ದನು. 4ನೆಕೋ ಯೆಹೋವಾಹಾಜನ ತಮ್ಮನಾದ ಎಲ್ಯಾ
ಕೀಮನನ್ನು ಯೆಹೋವಾಹಾಜನ ಬದಲಿಗೆ ಯೆಹೂದದ
ಮತ್ತು ಜೆರುಸಲೇಮಿನ ಅರಸನನ್ನಾಗಿ ಮಾಡಿದನು.
ಅವನಿಗೆ ಎಲ್ಯಾಕೀಮನ ಬದಲು ಯೆಹೋಯಾಕೀಮ
ಎಂಬ ಹೆಸರಿಟ್ಟನು. ನೆಕೋ ಯೆಹೋವಾಹಾಜನನ್ನು
ಈಜಿಪ್ಟಿಗೆ ತೆಗೆದುಕೊಂಡು ಹೋದನು.

### ಯೆಹೂದದ ಅರಸನಾದ ಯೆಹೋಯಾಕೀಮ

5ಯೆಹೋಯಾಕೀಮನು ಯೆಹೂದದೇಶದ ಪಟ್ಟಕ್ಕೆ
ಬಂದಾಗ ಇಪ್ಪತ್ತೈದು ವರುಷ ಪ್ರಾಯದವನಾಗಿದ್ದನು.
ಅವನು ಜೆರುಸಲೇಮಿನಲ್ಲಿ ಹನ್ನೊಂದು ವರುಷ ಆಳಿ
ದನು. ಯೆಹೋಯಾಕೀಮನು ಯೆಹೋವನ ಚಿತ್ತಕ್ಕೆ ಒಳ
ಗಾಗಲಿಲ್ಲ. ಅವನು ತನ್ನ ದೇವರಾದ ಯೆಹೋವನ
ವಿರುದ್ಧವಾಗಿ ಪಾಪಮಾಡಿದನು.
6ಬಾಬಿಲೋನಿನ ಅರಸನಾದ ನೆಬೂಕದ್ನೆಚ್ಚರನು
ಯೆಹೂದಪ್ರಾಂತ್ಯದ ಮೇಲೆ ಯುದ್ಧಕ್ಕೆ ಬಂದನು.
ಯೆಹೋಯಾಕೀಮನನ್ನು ಸೆರೆಹಿಡಿದು ಅವನನ್ನು
ಕಂಚಿನ ಸರಪಣಿಯಿಂದ ಕಟ್ಟಿಸಿದನು. ನಂತರ ಯೆಹೋ
ಯಾಕೀಮನನ್ನು ಬಾಬಿಲೋನಿಗೆ ತೆಗೆದುಕೊಂಡು
ಹೋದನು. 7ನೆಬೂಕದ್ನೆಚ್ಚರನು ದೇವಾಲಯದಿಂದ
ಹಲವಾರು ವಸ್ತುಗಳನ್ನು ತೆಗೆದುಕೊಂಡು ಹೋಗಿ
ಬಾಬಿಲೋನಿನ ತನ್ನ ಅರಮನೆಯಲ್ಲಿ ಇಟ್ಟುಕೊಂಡನು.
8ಯೆಹೋಯಾಕೀಮನು ಮಾಡಿದ ದುಷ್ಕ್ರಿಯೆಗಳೆಲ್ಲಾ
ಇಸ್ರೇಲಿನ ಮತ್ತು ಯೆಹೂದದ ರಾಜರುಗಳ ಗ್ರಂಥದಲ್ಲಿ
ಬರೆಯಲ್ಪಟ್ಟಿವೆ. ಯೆಹೋಯಾಕೀಮನ ಬದಲು
ಯೆಹೋಯಾಕೀನನು ಅರಸನಾದನು. ಇವನು
ಯೆಹೋಯಾಕೀಮನ ಮಗ.

### ಯೆಹೂದದ ಅರಸನಾದ ಯೆಹೋಯಾಕೀನ

9ಯೆಹೋಯಾಕೀನನು ಯೆಹೂದ ದೇಶದ ಪಟ್ಟಕ್ಕೆ
ಬಂದಾಗ ಹದಿನೆಂಟು ವರುಷದವನಾಗಿದ್ದನು. ಅವನು
ಜೆರುಸಲೇಮಿನಲ್ಲಿ ಮೂರು ತಿಂಗಳು ಹತ್ತು ದಿವಸಗಳ
ಕಾಲ ರಾಜ್ಯವನ್ನಾಳಿದನು. ಅವನು ಯೆಹೋವನ
ಚಿತ್ತಕ್ಕನುಸಾರವಾಗಿ ನಡೆಯಲಿಲ್ಲ. ಯೆಹೋಯಾಕೀ
ನನು ದೇವರಿಗೆ ವಿರುದ್ಧವಾಗಿ ಪಾಪಮಾಡಿದನು.
10ವಸಂತ ಕಾಲದಲ್ಲಿ ನೆಬೂಕದ್ನೆಚ್ಚರನು ತನ್ನ ಸೇವಕರನ್ನು
ಕಳುಹಿಸಿ ಯೆಹೋಯಾಕೀನನನ್ನು ಕರೆಯಿಸಿದನು. ಆ
ಸೇವಕರು ದೇವಾಲಯದ ಕೆಲವು ವಸ್ತುಗಳನ್ನೂ ಅವನ
ಜೊತೆಯಲ್ಲಿ ಬಾಬಿಲೋನಿಗೆ ತೆಗೆದುಕೊಂಡು
ಹೋದರು. ನೆಬೂಕದ್ನೆಚ್ಚರನು ಯೆಹೂದ ಮತ್ತು
ಜೆರುಸಲೇಮಿಗೆ ಚಿದ್ಕೀಯನನ್ನು ಹೊಸ ಅರಸನನ್ನಾಗಿ
ಮಾಡಿದನು. ಚಿದ್ಕೀಯನು ಯೆಹೋಯಾಕೀನನ
ಸಂಬಂಧಿಕನಾಗಿದ್ದನು.

### ಯೆಹೂದದ ಅರಸನಾದ ಚಿದ್ಕೀಯನು

11ಚಿದ್ಕೀಯನು ಅರಸನಾದಾಗ ಇಪ್ಪತ್ತೊಂದು ವರುಷ
ಪ್ರಾಯದವನಾಗಿದ್ದನು. ಅವನು ಜೆರುಸಲೇಮಿನಲ್ಲಿ
ಹನ್ನೊಂದು ವರುಷ ಕಾಲ ರಾಜ್ಯಭಾರ ಮಾಡಿದನು.
12ಚಿದ್ಕೀಯನು ಯೆಹೋವನ ಚಿತ್ತಾನುಸಾರವಾಗಿ ನಡೆ
ಯಲಿಲ್ಲ. ಅವನು ಯೆಹೋವನಿಗೆ ವಿರುದ್ಧವಾಗಿ ಪಾಪ
ಮಾಡಿದನು. ಪ್ರವಾದಿಯಾದ ಯೆರೆಮೀಯನು ದೇವರ
ಸಂದೇಶವನ್ನು ಕೊಡುತ್ತಾ ಬಂದನು. ಆದರೆ ಚಿದ್ಕೀ
ಯನು ದೇವರೆದುರಿಗೆ ತನ್ನನ್ನು ತಗ್ಗಿಸಿಕೊಳ್ಳದೆ ಯೆರೆ
ಮೀಯನ ಮೂಲಕ ಬಂದ ದೇವರ ಆಜ್ಞೆಗಳಿಗೆ
ವಿಧೇಯನಾಗಲಿಲ್ಲ.

### ಜೆರುಸಲೇಮಿನ ನಾಶನ

13ಚಿದ್ಕೀಯನು ನೆಬೂಕದ್ನೆಚ್ಚರನಿಗೆ ವಿರುದ್ಧವಾಗಿ
ದಂಗೆ ಎದ್ದನು. ನೆಬೂಕದ್ನೆಚ್ಚರನು ತನಗೆ ವಿಧೇಯ
ನಾಗಿರುವಂತೆ ಚಿದ್ಕೀಯನಿಂದ ಪ್ರಮಾಣ ಮಾಡಿಸಿ
ಕೊಂಡಿದ್ದನು. ಚಿದ್ಕೀಯನು ದೇವರ ಹೆಸರಿನಲ್ಲಿ ಆಣೆ
ಯಿಟ್ಟು ತಾನು ನೆಬೂಕದ್ನೆಚ್ಚರನಿಗೆ ನಂಬಿಗಸ್ತನಾಗಿರುವು
ದಾಗಿ ಪ್ರಮಾಣಮಾಡಿದ್ದನು. ಆದರೆ ಚಿದ್ಕೀಯನು
ಮನಸ್ಸನ್ನು ಕಠಿಣಮಾಡಿಕೊಂಡು ಇಸ್ರೇಲಿನ ದೇವರಾದ
ಯೆಹೋವನಿಗೆ ವಿಧೇಯನಾಗಲು ನಿರಾಕರಿಸಿದನು.
14ಅವನು ಮಾತ್ರವಲ್ಲದೆ ಎಲ್ಲಾ ಯಾಜಕರು, ಯೆಹೂ
ದದ ಜನನಾಯಕರು ಬಹಳ ಪಾಪಗಳನ್ನು ಮಾಡಿ
ಯೆಹೋವನ ದೃಷ್ಟಿಯಲ್ಲಿ ಕೆಟ್ಟು ಹೋಗಿದ್ದರು. ಅವರು
ಬೇರೆ ದೇಶಗಳ ನಡವಳಿಕೆಯನ್ನು ಅನುಸರಿಸಿದರು. ಆ
ನಾಯಕರುಗಳು ದೇವಾಲಯವನ್ನು ಹಾಳುಮಾಡಿದರು.
ಜೆರುಸಲೇಮಿನಲ್ಲಿದ್ದ ಆ ಆಲಯವನ್ನು ಯೆಹೋವನು
ತನಗಾಗಿ ಪ್ರತಿಷ್ಠಿಸಿಕೊಂಡಿದ್ದನು. 15ಅವರ ಪೂರ್ವಿಕರ
ದೇವರಾದ ಯೆಹೋವನು ಆಗಾಗ್ಗೆ ತನ್ನ ಪ್ರವಾದಿಗಳನ್ನು
ಕಳುಹಿಸಿ ತನ್ನ ಜನರನ್ನು ಎಚ್ಚರಿಸಿದನು. ಯಾಕಂದರೆ
ಆತನಿಗೆ ತನ್ನ ಜನರೂ ತನ್ನ ಮಂದಿರವೂ ನಾಶವಾಗು
ವದರಲ್ಲಿ ಇಷ್ಟವಿರಲಿಲ್ಲ. 16ಆದರೆ ಆತನ ಜನರು
ಪ್ರವಾದಿಗಳನ್ನು ಹಾಸ್ಯ ಮಾಡಿದರು; ಅವರ ಮಾತು
ಗಳನ್ನು ಕೇಳಲು ನಿರಾಕರಿಸಿದರು; ದೇವರ ಸಂದೇಶವನ್ನು
ದ್ವೇಷಿಸಿದರು. ಆಗ ದೇವರ ಕೋಪವು ಅವರ ಮೇಲೆ
ಉರಿಯತೊಡಗಿತು. ಅದನ್ನು ನಿಲ್ಲಿಸಲು ಯಾರಿಗೂ
ಸಾಧ್ಯವಾಗಲಿಲ್ಲ. 17ಯೆಹೂದದ ಮತ್ತು ಜೆರುಸಲೇಮಿನ
ಜನರನ್ನು ನಾಶಮಾಡಲು ಬಾಬಿಲೋನಿನ ಅರಸನನ್ನು

ಕಳುಹಿಸಿದನು. ಬಾಬಿಲೋನಿನ ಅರಸನು ದೇವಾಲಯ
ದೊಳಗಿದ್ದ ಯುವಜನರನ್ನು ಕೊಂದುಹಾಕಿದನು.
ಅವನಿಗೆ ಯೆಹೂದದ ಮತ್ತು ಜೆರುಸಲೇಮಿನ ಜನರ
ಮೇಲೆ ಕರುಣೆಯೇ ಇರಲಿಲ್ಲ. ಅವನು ಚಿಕ್ಕವರನ್ನೂ
ದೊಡ್ಡವರನ್ನೂ ಗಂಡಸರನ್ನೂ ಹೆಂಗಸರನ್ನೂ ಬಿಡದೆ
ಸಂಹರಿಸಿದನು. ರೋಗಿಗಳನ್ನೂ ಆರೋಗ್ಯವಂತರನ್ನೂ
ಸಂಹರಿಸಿದನು; ಯೆಹೂದದ ಮತ್ತು ಜೆರುಸಲೇಮಿನ
ಜನರನ್ನು ಶಿಕ್ಷಿಸಲು ದೇವರು ನೆಬೂಕದ್ನೆಚ್ಚರನನ್ನು ಉಪ
ಯೋಗಿಸಿದನು. 18ದೇವಾಲಯದೊಳಗಿದ್ದ ಎಲ್ಲಾ ವಸ್ತು
ಗಳನ್ನು ನೆಬೂಕದ್ನೆಚ್ಚರನು ಬಾಬಿಲೋನಿಗೆ ಸಾಗಿಸಿದನು.
ದೇವಾಲಯದೊಳಗೂ ಅರಸನ ಬಳಿಯಲ್ಲಿಯೂ ಅಧಿ
ಕಾರಿಗಳ ಬಳಿಯಲ್ಲಿಯೂ ಇದ್ದ ಬೆಲೆಬಾಳುವ ವಸ್ತು
ಗಳನ್ನೆಲ್ಲಾ ಬಾಬಿಲೋನಿಗೆ ಸಾಗಿಸಿದನು. 19ನೆಬೂ
ಕದ್ನೆಚ್ಚರನು ಮತ್ತು ಅವನ ಸೈನಿಕರು ದೇವಾಲಯವನ್ನು
ಸುಟ್ಟುಹಾಕಿದರು; ಜೆರುಸಲೇಮ್ ಪಟ್ಟಣದ ಪೌಳಿ
ಗೋಡೆಯನ್ನು ಕೆಡವಿ ಹಾಕಿದರು; ಅರಸನ ಮತ್ತು ಅವನ
ಪರಿವಾರದವರ ಮನೆಗಳನ್ನೆಲ್ಲಾ ಸುಟ್ಟುಹಾಕಿದರು.
ಜೆರುಸಲೇಮಿನಲ್ಲಿದ್ದ ಬೆಲೆಬಾಳುವ ವಸ್ತುಗಳನ್ನೆಲ್ಲಾ
ದೋಚಿದರು ಮತ್ತು ಸುಟ್ಟುಹಾಕಿದರು; 20ಜೀವದಿಂದು
ಳಿದ ಜನರನ್ನು ಸೆರೆಹಿಡಿದು ಬಾಬಿಲೋನಿಗೆ ತೆಗೆದು
ಕೊಂಡು ಹೋಗಿ ತಮ್ಮ ಗುಲಾಮರನ್ನಾಗಿ ಮಾಡಿ
ಕೊಂಡರು. ಪಾರಸಿಯ ಸಾಮ್ರಾಜ್ಯ ಸ್ಥಾಪನೆಯಾಗುವ
ತನಕ ಅವರು ಅಲ್ಲಿ ಗುಲಾಮರಾಗಿದ್ದರು. 21ಹೀಗೆ
ಯೆಹೋವನು ತನ್ನ ಪ್ರವಾದಿಯಾದ ಯೆರೆಮೀಯನ
ಮೂಲಕ ಹೇಳಿಸಿದ ಮಾತುಗಳನ್ನು ನೆರವೇರಿಸಿದನು.
‘‘ಈ ಸ್ಥಳವು ಎಪ್ಪತ್ತು ವರುಷಗಳ ತನಕ ಪಾಳು
ಬೀಳುವದು. ಜನರು ಆಚರಿಸದೆ ಹೋದ ಸಬ್ಬತ್ ಹಬ್ಬ
ಗಳಿಗೆ ಅದು ಪರಿಹಾರವಾಗಿರುವುದು’’ ಎಂದು ಯೆರೆ
ಮೀಯನು ಹೇಳಿದ್ದನು.

22ಪಾರಸಿ ರಾಜನಾದ ಕೋರೆಷನ ಆಳ್ವಿಕೆಯ
ಮೊದಲನೆಯ ವರುಷದಲ್ಲಿ ಯೆಹೋವನು ಅವನಿಂದ
ಒಂದು ವಿಶೇಷ ಪ್ರಕಟನೆಯನ್ನು ಹೊರಡಿಸಿದನು.
ಯೆರೆಮೀಯನು ಹೇಳಿದ ಮಾತು ನೆರವೇರುವಂತೆ
ಇದಾಯಿತು. ಕೋರೇಷನು ತನ್ನ ಸಾಮ್ರಾಜ್ಯದ ಮೂಲೆ
ಮೂಲೆಗಳಿಗೆ ಜನರನ್ನು ಕಳುಹಿಸಿ ಈ ಸಂದೇಶವನ್ನು
ಕೊಟ್ಟನು:

23‘‘ಪಾರಸಿ ರಾಜನಾದ ಕೋರೆಷನು ತಿಳಿಸುವದೇ
ನಂದರೆ, ಪರಲೋಕದಲ್ಲಿರುವ ದೇವರಾದ ಯೆಹೋ
ವನು ನನ್ನನ್ನು ಇಡೀ ಭೂಮಿಗೆ ಅರಸನನ್ನಾಗಿ
ಮಾಡಿದ್ದಾನೆ. ಆತನು ಜೆರುಸಲೇಮಿನಲ್ಲಿರುವ ತನ್ನ
ಆಲಯವನ್ನು ತಿರುಗಿ ಕಟ್ಟುವ ಜವಾಬ್ದಾರಿಕೆಯನ್ನು ನನಗೆ
ಕೊಟ್ಟಿರುತ್ತಾನೆ. ಆದುದರಿಂದ ದೇವರ ಜನರೆಲ್ಲಾ ಜೆರುಸ
ಲೇಮಿಗೆ ಹಿಂತಿರುಗಿ ಹೋಗಬಹುದು. ನಿಮ್ಮ ದೇವರಾದ
ಯೆಹೋವನು ನಿಮ್ಮೊಂದಿಗೆ ಇರಲಿ.’’

# ಎಜ್ರ

## ಯೆಹೂದ್ಯ ಸೆರೆಯಾಳುಗಳು ಹಿಂತಿರುಗಿ ಹೋಗಲು ಸೈರಸನ ಸಹಾಯ

1 ಪರ್ಷಿಯಾದ ರಾಜನಾದ ಸೈರಸನ ಆಳ್ವಿಕೆಯ
ಮೊದಲನೆಯ ವರುಷದಲ್ಲಿ* ಒಂದು ಪ್ರಕಟನೆ
ಯನ್ನು ಹೊರಡಿಸಲು ಯೆಹೋವನು ಅವನನ್ನು
ಪ್ರೇರೇಪಿಸಿದನು. ಆ ಪ್ರಕಟನೆಯನ್ನು ಬರೆಯಿಸಿ ತನ್ನ
ಸಾಮ್ರಾಜ್ಯದ ಎಲ್ಲಾ ಕಡೆಗಳಲ್ಲಿ ಅವನು ಅದನ್ನು ಓದಿಸಿ
ದನು. ಯೆರೆಮೀಯನ ಮೂಲಕ ಯೆಹೋವನು ಹೇಳಿದ
ವಿಷಯಗಳು ನೆರವೇರುವಂತೆ ಇದಾಯಿತು. ಆ ಪ್ರಕಟನೆ
ಇಂತಿದೆ:
2 ‘‘ಪರ್ಷಿಯಾದ ರಾಜನಾದ ಸೈರಸನ ಪ್ರಕಟನೆ: ಪರ
ಲೋಕದ ದೇವರಾದ ಯೆಹೋವನು ಭೂಲೋಕದ
ಲ್ಲಿರುವ ಎಲ್ಲಾ ದೇಶಗಳನ್ನು ನನ್ನ ವಶಕ್ಕೆ ಕೊಟ್ಟಿದ್ದಾನೆ.
ಯೆಹೂದ ದೇಶದ ಜೇರುಸಲೇಮ್‌ನಲ್ಲಿ ತನಗೊಂದು
ಆಲಯವನ್ನು ಕಟ್ಟಲು ಆತನು ನನ್ನನ್ನು ಆರಿಸಿಕೊಂಡಿ
ದ್ದಾನೆ. 3 ಆತನು ಜೆರುಸಲೇಮ್‌ನಲ್ಲಿರುವಾತನೂ
ಇಸ್ರೇಲರ ದೇವರೂ ಆಗಿದ್ದಾನೆ. ದೇವಜನರಲ್ಲಿ ಯಾರಾ
ದರೂ ನಿಮ್ಮೊಂದಿಗೆ ವಾಸಿಸುತ್ತಿದ್ದರೆ ದೇವರ ಆಶೀರ್ವಾ
ದವು ಅವರ ಮೇಲಿರಲಿ. ಯೆಹೂದ ಪ್ರಾಂತ್ಯದಲ್ಲಿರುವ
ಜೆರುಸಲೇಮಿಗೆ ಹೋಗಲು ಅವರಿಗೆ ಅವಕಾಶಕೊಡಿರಿ.
ಅವರು ಹೋಗಿ ಯೆಹೋವನಿಗಾಗಿ ದೇವಾಲಯವನ್ನು
ಕಟ್ಟಲಿ. 4 ಆದುದರಿಂದ ಯಾವ ಸ್ಥಳದಲ್ಲಿಯಾದರೂ
ಇಸ್ರೇಲರಲ್ಲಿ ಉಳಿದವರು ಇದ್ದಲ್ಲಿ ಅಂಥವರಿಗೆ ಆ
ಸ್ಥಳದವರು ಸಹಾಯ ಮಾಡಬೇಕು. ಅವರಿಗೆ ಬೆಳ್ಳಿ,
ಬಂಗಾರ, ಪಶುಗಳನ್ನು ಮತ್ತು ಇತರ ವಸ್ತುಗಳನ್ನು
ಕೊಡಲಿ. ಜೆರುಸಲೇಮಿನಲ್ಲಿನ ದೇವಾಲಯಕ್ಕೆ ಕಾಣಿಕೆ
ಗಳನ್ನು ಕೊಡಲಿ.’’
5 ಆಗ ಯೆಹೂದ ಮತ್ತು ಬೆನ್ಯಾಮೀನ್ ಕುಲಗಳ
ಪ್ರಧಾನರೂ ನಾಯಕರೂ ಜೆರುಸಲೇಮಿಗೆ ಹೊರಟರು.
ದೇವಾಲಯವನ್ನು ಕಟ್ಟಲು ಅವರು ಹೊರಟಾಗ ದೇವ
ರಿಂದ ಪ್ರೋತ್ಸಾಹಿಸಲ್ಪಟ್ಟ ಇತರ ಜನರೂ ಅವರೊಂದಿಗೆ
ಜೆರುಸಲೇಮಿಗೆ ಹೊರಟರು. 6 ಅವರ ನೆರೆಹೊರೆ
ಯವರು ಅವರಿಗೆ ತುಂಬಾ ಕಾಣಿಕೆಗಳನ್ನು ಕೊಟ್ಟರು.
ಅವರಿಗೆ ಬೆಳ್ಳಿಬಂಗಾರಗಳನ್ನು, ಪಶುಗಳನ್ನು ಮತ್ತು ಇತರ
ಬೆಲೆಬಾಳುವ ವಸ್ತುಗಳನ್ನು ಧಾರಾಳವಾಗಿ ಕೊಟ್ಟರು.
7 ಅಲ್ಲದೆ ಸೈರಸ್ ರಾಜನು ದೇವಾಲಯಕ್ಕೆ ಸಂಬಂಧಿಸಿದ
ವಸ್ತುಗಳನ್ನೆಲ್ಲಾ ಹೊರತೆಗೆದನು. ನೆಬೂಕದ್ನೆಚ್ಚರ
ಅರಸನು ಜೆರುಸಲೇಮ್ ದೇವಾಲಯದಿಂದ ಸೂರೆ
ಮಾಡಿ ತಂದ ಸಾಮಾಗ್ರಿಗಳನ್ನು ತನ್ನ ವಿಗ್ರಹಗಳನ್ನಿಡುವ
ಕೋಣೆಯಲ್ಲಿ ಇಟ್ಟಿದ್ದನು. 8 ಪರ್ಷಿಯಾದ ರಾಜನಾದ
ಸೈರಸ್ ತನ್ನ ಖಜಾನೆಯ ಮೇಲ್ವಿಚಾರಕನಾದ ಮಿತ್ರದಾತ
ನಿಗೆ ಆ ವಸ್ತುಗಳನ್ನು ಹೊರತರಲು ಹೇಳಿದನು. ಮಿತ್ರ
ದಾತನು ಯೆಹೂದ ನಾಯಕನಾದ ಶೆಷ್ಬಚ್ಚರನಿಗೆ ಆ
ವಸ್ತುಗಳನ್ನು ಕೊಟ್ಟನು. 9 ಅವು ಯಾವುವೆಂದರೆ:

| | | |
|---|---|---|
| | ಬಂಗಾರದ ಬೋಗುಣಿಗಳು | 30 |
| | ಬೆಳ್ಳಿ ಬೋಗುಣಿಗಳು | 1000 |
| | ಕತ್ತಿಗಳು ಮತ್ತು ಪಾತ್ರೆಗಳು | 29 |
| 10 | ಚಿನ್ನದ ಬಟ್ಟಲುಗಳು | 30 |
| | ಬೆಳ್ಳಿಯ ಬಟ್ಟಲುಗಳು | 410 |
| | ಇತರ ಪಾತ್ರೆಗಳು | 1,000 |

11 ಒಟ್ಟು ಬೆಳ್ಳಿಬಂಗಾರದ ಪಾತ್ರೆಗಳು ಐದು ಸಾವಿರದ
ನಾನೂರು. ಸೆರೆಯವರು ಬಾಬಿಲೋನ್ ನಗರವನ್ನು
ಬಿಟ್ಟು ಜೆರುಸಲೇಮಿಗೆ ಹೊರಟಾಗ ಈ ವಸ್ತುಗಳೆಲ್ಲಾ
ಶೆಷ್ಬಚ್ಚರನ ವಶದಲ್ಲಿದ್ದವು.

## ಹಿಂತಿರುಗಿಹೋದ ಸೆರೆಯವರು

2 ಸೆರೆಯಿಂದ ಮರಳಿಬಂದ ಸಂಸ್ಥಾನದವರ ವಿವರ.
ಬಹಳ ವರುಷಗಳ ಹಿಂದೆ ಬಾಬಿಲೋನಿನ ಅರಸ
ನಾದ ನೆಬೂಕದ್ನೆಚ್ಚರನು ಇವರನ್ನು ಸೆರೆಹಿಡಿದು ಬಾಬಿ
ಲೋನಿಗೆ ಒಯ್ದಿದ್ದನು. ಇವರು ಜೆರುಸಲೇಮಿಗೆ ಹಿಂತಿ
ರುಗಿ ಬಂದು ಎಲ್ಲರೂ ತಮ್ಮತಮ್ಮ ಸ್ವಂತ ಊರುಗಳಿಗೆ
ಹೊರಟು ಹೋದರು. 2 ಜೆರುಬ್ಬಾಬೆಲನೊಂದಿಗೆ*

---

**ವರುಷದಲ್ಲಿ** ಕ್ರಿ.ಪೂ. 538ನೇ ಇಸವಿ.

**ಜೆರುಬ್ಬಾಬೆಲ್** ಶೆಷ್ಬಚ್ಚರ ಎಂದು ಸಹ ಕರೆಯುತ್ತಾರೆ.

ಹಿಂತಿರುಗಿದವರು ಯಾರೆಂದರೆ: ಯೇಷೂವ, ನೆಹೆ
ಮೀಯ, ಸೆರಾಯ, ರೆಗೇಲಾಯ, ಮೊರ್ದೆಕೈ, ಬಿಲ್ಷಾನ್,
ಮಿಸ್ಪಾರ್, ಬಿಗ್ವೈ, ರೆಹೂಮ್ ಮತ್ತು ಬಾಣ. ಇಸ್ರೇಲ
ರಲ್ಲಿ ಹಿಂತಿರುಗಿ ಬಂದವರ ಹೆಸರು ಮತ್ತು ಸಂಖ್ಯೆ:

| | | |
|---|---|---|
| 3 | ಪರೋಷಿನ ಸಂತತಿಯವರು | 2,172 |
| 4 | ಶೆಫಟ್ಯನ ಸಂತತಿಯವರು | 372 |
| 5 | ಆರಹನ ಸಂತತಿಯವರು | 775 |
| 6 | ಯೇಷೂವ ಮತ್ತು ಯೋವಾಬನ ಕುಟುಂಬದ ಪಹತ್ ಮೋವಾಬಿನ ಸಂತತಿಯವರು | 2,812 |
| 7 | ಏಲಾಮಿನ ಸಂತತಿಯವರು | 1,254 |
| 8 | ಜತ್ತೂವಿನ ಸಂತತಿಯವರು | 945 |
| 9 | ಜಕ್ಕೈಯ ಸಂತತಿಯವರು | 760 |
| 10 | ಬಾನೀಯ ಸಂತತಿಯವರು | 642 |
| 11 | ಬೇಬೈಯ ಸಂತತಿಯವರು | 623 |
| 12 | ಅಜ್ಗಾದಿನ ಸಂತತಿಯವರು | 1,222 |
| 13 | ಅದೋನೀಕಾಮನ ಸಂತತಿಯವರು | 666 |
| 14 | ಬಿಗ್ವೈಯ ಸಂತತಿಯವರು | 2,056 |
| 15 | ಆದೀನನ ಸಂತತಿಯವರು | 454 |
| 16 | ಆಟೇರಿನವರಾದ ಹಿಜ್ಕೀಯನ ಸಂತತಿಯವರು | 98 |
| 17 | ಬೇಚೈಯ ಸಂತತಿಯವರು | 323 |
| 18 | ಯೋರನ ಸಂತತಿಯವರು | 112 |
| 19 | ಹಾಷುಮಿನ ಸಂತತಿಯವರು | 223 |
| 20 | ಗಿಬ್ಬಾರಿನ ಸಂತತಿಯವರು | 95 |
| 21 | ಬೇತ್ಲೆಹೇಮಿನ ಊರಿನವರು | 123 |
| 22 | ನೆಟೋಫ ಊರಿನವರು | 56 |
| 23 | ಅನಾತೋತ್ ಊರಿನವರು | 128 |
| 24 | ಅಜ್ಮಾವೆತ್ ಊರಿನವರು | 42 |
| 25 | ಕಿರ್ಯತ್ಯಾರೀಮ್, ಕೆಫೀರ ಮತ್ತು ಬೇರೋತ್ ಊರುಗಳವರು | 743 |
| 26 | ರಾಮಾ ಮತ್ತು ಗೆಬ ಊರುಗಳವರು | 621 |
| 27 | ಮಿಕ್ಮಾಸಿನವರು | 122 |
| 28 | ಬೇತೇಲ್ ಮತ್ತು ಆಯಿ ಎಂಬ ಊರುಗಳವರು | 223 |
| 29 | ನೆಬೋ ಊರಿನವರು | 52 |
| 30 | ಮಗ್ಬೀಷ್ ಊರಿನವರು | 156 |
| 31 | ಏಲಾಮ್ ಎಂಬ ಮತ್ತೊಂದು ಊರಿನವರು | 1,254 |
| 32 | ಹಾರಿಮ್ ಊರಿನವರು | 320 |
| 33 | ಲೋದ್, ಹಾದೀದ್, ಓನೋ ಊರುಗಳವರು | 725 |
| 34 | ಯೆರಿಕೋ ಊರಿನವರು | 345 |
| 35 | ಸೆನಾಹ ಊರಿನವರು | 3,630 |

36 ಯಾಜಕರು ಯಾರೆಂದರೆ:

| | | |
|---|---|---|
| | ಯೇಷೂವನ ಕುಟುಂಬಕ್ಕೆ ಸೇರಿದ ಯೆದಾಯನ ಸಂತತಿಯವರು | 973 |
| 37 | ಇಮ್ಮೇರನ ಸಂತತಿಯವರು | 1,052 |
| 38 | ಪಷ್ಹೂರನ ಸಂತತಿಯವರು | 1,247 |
| 39 | ಹಾರಿಮನ ಸಂತತಿಯವರು | 1,017 |

40 ಲೇವಿ ಕುಲದವರು ಯಾರೆಂದರೆ:
ಹೋದವ್ಯನ ಕುಟುಂಬಕ್ಕೆ ಸೇರಿದ ಯೇಷೂವ ಮತ್ತು ಕದ್ಮೀಯೇಲರ ಸಂತತಿಯವರು 74

41 ಗಾಯಕರು ಯಾರೆಂದರೆ:
ಆಸಾಫನ ಸಂತತಿಯವರು 128

42 ದ್ವಾರಪಾಲಕರು ಯಾರೆಂದರೆ:
ಶಲ್ಲೂಮ್, ಅಟೇರ್, ಟಲ್ಮೋನ್,
ಅಕ್ಕೂಬ್, ಹಟೀಟ್ ಮತ್ತು ಶೋಬೈ
ಇವರ ಸಂತತಿಯವರು ಒಟ್ಟು 139

43 ದೇವಾಲಯದ ವಿಶೇಷ ಸೇವಕರು ಯಾರೆಂದರೆ:
ಜೀಹ, ಹಸೂಫ, ಟಬ್ಬಾವೋತ್,
44 ಕೇರೋಸ್, ಸೀಯಹಾ, ಪಾದೋನ್,
45 ಲೆಬಾನ, ಹಗಾಬ, ಅಕ್ಕೂಬ್,
46 ಹಾಗಾಬ್, ಶೆಮ್ಲೈ, ಹಾನಾನ್,
47 ಗಿದ್ದೇಲ್, ಗಹರ್, ರೆವಾಯ,
48 ರೆಚೀನ್, ನೆಕೋದ, ಗಜ್ಜಾಮ್,
49 ಉಜ್ಜ, ಪಾಸೇಹ, ಬೇಸೈ,
50 ಅಸ್ನ, ಮೆಗೂನೀಮ್, ನೆಫೀಸೀಮ್,
51 ಬಕ್ಬೂಕ್, ಹಕ್ಕೂಫ, ಹರ್ಹೂರ್,
52 ಬಚ್ಲೂತ್, ಮೆಹೀದ, ಹರ್ಷ,
53 ಬರ್ಕೋಸ್, ಸೀಸೆರ, ತೆಮಹ,
54 ನೆಚೀಹ, ಹಟೀಫ ಇವರ ಸಂತತಿಯವರು.

55 ಸೊಲೊಮೋನನ ಸೇವಕರ ಸಂತತಿಯವರು:
ಸೋಟೈ, ಹಸ್ಸೋಫೆರೆತ್, ಫೆರೂಧ,
56 ಯಾಲ, ದರ್ಕೋನ್, ಗಿದ್ದೇಲ್,
57 ಶೆಫಟ್ಯ, ಹಟ್ಟೀಲ್, ಪೋಕೆರೆತ್, ಹಚ್ಚೆ
ಬಾಯೀಮ್, ಆಮೀ ಇವರ ಸಂತತಿಯವರು.
58 ದೇವಾಲಯದ ಎಲ್ಲಾ ಸೇವಕರೂ
ಸೊಲೊಮೋನನ ಸೇವಕರೂ
ಒಟ್ಟು ಸೇರಿ 392

59-60ತೇಲ್ಮೆಲಹ, ತೇಲ್ಹರ್ಷ, ಕೆರೂಬದ್ದಾನ್ ಮತ್ತು
ಇಮ್ಮೇರ್ ಎಂಬ ಊರುಗಳಿಂದ ಕೆಲವರು ಬಂದರು.
ಇವರ ಕುಟುಂಬಗಳು ಇಸ್ರೇಲ್ ಕುಟುಂಬಕ್ಕೆ ಸೇರಿದವು
ಗಳಾಗಿವೆ ಎಂದು ರುಜುವಾತುಪಡಿಸಲು ಇವರಿಗೆ ಸಾಧ್ಯ
ವಾಗಲಿಲ್ಲ. ಅವರು ಯಾರೆಂದರೆ:

| | |
|---|---|
| ದೆಲಾಯ, ಟೋಬೀಯ ಮತ್ತು ನೆಕೋದನ ಸಂತತಿಯವರು | 652 |

61ಯಾಜಕರಾದ ಹಬಯ್ಯ, ಹಕ್ಕೋಚ್, ಬರ್ಜಿಲ್ಲೈ
ಇವರ ಸಂತತಿಯವರು. (ಈ ಬರ್ಜಿಲ್ಲೈ ಎಂಬವನು
ಗಿಲ್ಯಾದ್ಯನಾದ ಬರ್ಜಿಲ್ಲೈಯ ಹೆಣ್ಣುಮಕ್ಕಳಲ್ಲಿ ಒಬ್ಬಳನ್ನು
ಮದುವೆ ಮಾಡಿಕೊಂಡು ಅವನ ಹೆಸರನ್ನೂ ಇಟ್ಟು
ಕೊಂಡಿದ್ದನು.) 62ಇವರು ಹುಡುಕಿದರೂ ತಮ್ಮ ವಂಶಾ
ವಳಿ ಪತ್ರವನ್ನು ಕಂಡುಕೊಳ್ಳಲಾಗಲಿಲ್ಲ. ಆದ್ದರಿಂದ
ಇವರು ಅಶುದ್ಧರೆಂದು ಪರಿಗಣಿಸಲ್ಪಟ್ಟು ಯಾಜಕತ್ವ
ದಿಂದ ತಳ್ಳಲ್ಪಟ್ಟರು. 63ಊರೀಮ್ ತುಮ್ಮೀಮ್‌ಗಳ
ಮೂಲಕ ದೇವರ ಚಿತ್ತವನ್ನು ತಿಳಿಯಲು ಶಕ್ತನಾದ
ಯಾಜಕನು ದೊರಕುವ ತನಕ ಇವರು ದೇವರಿಗೆ
ಅರ್ಪಿಸಿದ್ದ ಪರಿಶುದ್ಧ ಆಹಾರವನ್ನು ತಿನ್ನಬಾರದೆಂದು
ದೇಶಾಧಿಪತಿಯು ಆಜ್ಞಾಪಿಸಿದನು.

64-65ಹೀಗೆ ಒಟ್ಟು ನಲವತ್ತೆರಡು ಸಾವಿರದ ಮೂನ್ನೂರ
ಅರವತ್ತು ಮಂದಿ ತಮ್ಮ ಸ್ವದೇಶಕ್ಕೆ ಹಿಂದಿರುಗಿದರು.
ಇವರಲ್ಲಿನ ಅವರ ಏಳು ಸಾವಿರದ ಮುನ್ನೂರ ಮೂವ
ತ್ತೇಳು ಸೇವಕ ಸೇವಕಿಯರನ್ನು ಸೇರಿಸಲಿಲ್ಲ. ಇವ
ರೊಂದಿಗೆ ಇನ್ನೂರು ಮಂದಿ ಗಾಯಕ ಗಾಯಕಿಯರೂ
ಇದ್ದರು.

66-67ಅವರ ಬಳಿಯಲ್ಲಿ ಏಳುನೂರ ಮೂವತ್ತಾರು
ಕುದುರೆಗಳು, ಇನ್ನೂರ ನಲವತ್ತೈದು ಹೇಸರ ಕತ್ತೆಗಳು,
ನಾನೂರ ಮೂವತ್ತೈದು ಒಂಟೆಗಳು, ಮತ್ತು ಆರು
ಸಾವಿರದ ಏಳುನೂರ ಇಪ್ಪತ್ತು ಕತ್ತೆಗಳೂ ಇದ್ದವು.

68ಈ ಗುಂಪು ಜೆರುಸಲೇಮಿನಲ್ಲಿದ್ದ ದೇವಾಲಯದ
ಬಳಿ ಬಂದಾಗ ಆ ದೇವಾಲಯವನ್ನು ಮತ್ತೆ ನಿರ್ಮಿಸಲು
ಕುಟುಂಬದ ನಾಯಕರುಗಳು ತಮ್ಮತಮ್ಮ ಕಾಣಿಕೆಗಳನ್ನು
ಕೊಟ್ಟರು. ಕೆಡವಲ್ಪಟ್ಟಿದ್ದ ದೇವಾಲಯದ ಸ್ಥಳದಲ್ಲಿಯೇ
ಹೊಸ ದೇವಾಲಯವನ್ನು ಕಟ್ಟಲು ಪ್ರಾರಂಭಿಸುವರು.
69ದೇವಾಲಯ ಕಟ್ಟಲು ಅವರು ತಮ್ಮಿಂದ ಸಾಧ್ಯ
ವಾದಷ್ಟು ಕಾಣಿಕೆಗಳನ್ನು ಕೊಟ್ಟರು. ಒಟ್ಟು ಐನೂರು
ಕಿಲೋಗ್ರಾಂ ಬಂಗಾರ, ಮೂರು ಸಾವಿರ ಕಿಲೋಗ್ರಾಂ
ಬೆಳ್ಳಿ, ನೂರು ಯಾಜಕರು ಧರಿಸಬೇಕಾದ ಬಟ್ಟೆಗಳನ್ನು
ದಾನ ಮಾಡಿದರು. 70ಅವರಲ್ಲಿದ್ದ ಯಾಜಕರು,
ಲೇವಿಯರು ಮತ್ತು ಇನ್ನಿತರರು ಜೆರುಸಲೇಮ್ ಮತ್ತು
ಅದರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೆಲೆಸಿದರು.
ಇವರೊಳಗೆ ಗಾಯಕರೂ ದ್ವಾರಪಾಲಕರೂ ದೇವಾಲ
ಯದ ಸೇವಕರೂ ಇದ್ದರು. ಉಳಿದ ಇಸ್ರೇಲ್ ಜನರು
ತಮ್ಮತಮ್ಮ ಊರುಗಳಲ್ಲಿ ವಾಸಿಸಿದರು.

### ಯಜ್ಞವೇದಿಕೆಯನ್ನು ತಿರುಗಿ ಕಟ್ಟಿದ್ದು

3 ತಮ್ಮತಮ್ಮ ಸ್ವಂತ ಊರುಗಳಲ್ಲಿ ಹೋಗಿ ನೆಲೆಸಿದ್ದ
ಇಸ್ರೇಲರು ಏಳನೆಯ ತಿಂಗಳಲ್ಲಿ ಜೆರುಸಲೇಮಿನಲ್ಲಿ
ಒಂದೇ ಮನಸ್ಸಿನಿಂದ ಬಂದು ಸೇರಿದರು. 2ಆಗ
ಯೋಚಾದಾಕನ ಮಗನಾದ ಯೇಷೂವನೂ ಅವ
ನೊಂದಿಗೆ ಇದ್ದ ಯಾಜಕರೂ ಶೆಯಲ್ತೀಯೇಲನ ಮಗ
ನಾದ ಜೆರುಬ್ಬಾಬೆಲ್ ಮತ್ತು ಅವನೊಂದಿಗಿದ್ದ ಜನ
ರೊಂದಿಗೆ ಇಸ್ರೇಲ್ ದೇವರಿಗೆ ಯಜ್ಞವೇದಿಕೆಯನ್ನು
ಕಟ್ಟಿದರು. ದೇವರ ಸೇವಕನಾದ ಮೋಶೆಯ ಧರ್ಮ
ಶಾಸ್ತ್ರದಲ್ಲಿ ಬರೆದಿರುವಂತೆ ದೇವರಿಗೆ ಯಜ್ಞವನ್ನು
ಸಮರ್ಪಿಸಲು ಇವರು ವೇದಿಕೆಯನ್ನು ಕಟ್ಟಿದರು.

3ತಮ್ಮ ಸುತ್ತಲು ವಾಸಿಸುವ ಅನ್ಯಜನರಿಗೆ ಅವರು ಭಯ
ಪಟ್ಟರೂ ಹಳೆಯ ಅಸ್ತಿವಾರದ ಮೇಲೆ ವೇದಿಕೆಯನ್ನು
ಕಟ್ಟಿದರು. ಅವರು ಹಾಗೆ ಮಾಡುವುದನ್ನು ನಿಲ್ಲಿಸಲಿಲ್ಲ.
ಕಟ್ಟಿಮುಗಿಸಿದ ಬಳಿಕ ಬೆಳಿಗ್ಗೆ ಸಾಯಂಕಾಲ ಹೋಮ
ಯಜ್ಞಾದಿಗಳನ್ನು ಸಮರ್ಪಿಸಿದರು. 4ಇದಲ್ಲದೆ
ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದಿರುವಂತೆ ಪರ್ಣ
ಶಾಲೆಗಳ ಹಬ್ಬವನ್ನು ಆಚರಿಸಿದರು. ಹಬ್ಬದ ಪ್ರತಿ ದಿವಸ
ಗಳಲ್ಲಿ ನೇಮಿತ ಸರ್ವಾಂಗಹೋಮಗಳನ್ನು ಅರ್ಪಿಸಿ
ದರು. 5ಇದಾದ ಬಳಿಕ ಅವರು ನಿತ್ಯಸರ್ವಾಂಗ ಹೋಮ
ವನ್ನೂ ಅಮಾವಾಸ್ಯೆ ಮತ್ತು ಇತರ ಹಬ್ಬದ ದಿನಗಳಲ್ಲಿ
ಧರ್ಮಶಾಸ್ತ್ರದ ಪ್ರಕಾರ ಅರ್ಪಿಸಬೇಕಾದ ಯಜ್ಞ
ಹೋಮಗಳನ್ನೂ ಸಮರ್ಪಿಸಿದರು. ಜನರು ತಾವು
ಯೆಹೋವನಿಗೆ ಕೊಡಬೇಕೆಂದಿದ್ದ ಇತರ ಕಾಣಿಕೆಗಳನ್ನು
ಸಹ ತಂದು ಕೊಡಲಾರಂಭಿಸಿದರು. 6ದೇವಾಲಯವು
ತಿರಿಗಿ ಕಟ್ಟಲ್ಪಡದಿದ್ದರೂ ಏಳನೆಯ ತಿಂಗಳಿನ ಮೊದಲ
ನೆಯ ದಿನದಿಂದ ಇಸ್ರೇಲರು ಯೆಹೋವನಿಗೆ ಯಜ್ಞ
ಗಳನ್ನು ಸಮರ್ಪಿಸಲು ಪ್ರಾರಂಭಿಸಿದರು.

### ದೇವಾಲಯದ ಪುನರ್ನಿರ್ಮಾಣ

7ಸೆರೆಯಿಂದ ಹಿಂತಿರುಗಿಬಂದ ಜನರು ಬಡಗಿಗಳಿಗೂ
ಕಲ್ಲುಕುಟಿಗರಿಗೂ ಹಣ ಕೊಟ್ಟರು. ಲೆಬನೋನಿನಿಂದ
ದೇವದಾರು ಮರಗಳನ್ನು ಸಾಗಿಸುವ ತೂರ್ಯರಿಗೆ ಮತ್ತು
ಚೀದೋನ್ಯರಿಗೆ ಆಹಾರ ಪದಾರ್ಥಗಳನ್ನು ಆಲಿವ್ ಎಣ್ಣೆ
ಯನ್ನು ಮತ್ತು ದ್ರಾಕ್ಷಾರಸವನ್ನು ಸಂಬಳವಾಗಿ ಕೊಟ್ಟರು.
ಸೊಲೊಮೋನನು ಮೊದಲನೆಯ ದೇವಾಲಯವನ್ನು
ಕಟ್ಟುವಾಗ ಅದಕ್ಕೆ ಬೇಕಾದ ಮರಗಳನ್ನು ಸಮುದ್ರ
ಮಾರ್ಗವಾಗಿ ತಂದಂತೆಯೇ ಇವರೂ ಜೆರುಸಲೇಮಿಗೆ

ಸಮೀಪವಿರುವ ಯೊಪ್ಪಕ್ಕೆ ಸಮುದ್ರ ಮಾರ್ಗವಾಗಿ
ತಂದರು. ಪರ್ಶಿಯಾದ ಅರಸನಾದ ಸೈರಸನ ಆಜ್ಞೆಗನು
ಸಾರವಾಗಿ ಇವೆಲ್ಲವೂ ಮಾಡಲ್ಪಟ್ಟವು.
8ಜೆರುಸಲೇಮಿನ ದೇವಾಲಯಕ್ಕೆ ಬಂದ ಎರಡನೆಯ
ವರುಷದ ಎರಡನೆಯ ತಿಂಗಳಲ್ಲಿ ಶೆಯಲ್ತಿಯೇಲನ
ಮಗನಾದ ಜೆರುಬ್ಬಾಬೆಲ್ ಮತ್ತು ಯೋಚಾದಾಕನ
ಮಗನಾದ ಯೇಷೂವನು ಕೆಲಸವನ್ನು ಪ್ರಾರಂಭಿಸಿದರು.
ಅವರ ಸಹೋದರರು, ಯಾಜಕರು, ಲೇವಿಯರು ಮತ್ತು
ಅವರೊಂದಿಗೆ ಸೆರೆಯಿಂದ ಬಂದವರೆಲ್ಲರೂ ಕೆಲಸ
ಮಾಡಿದರು. ಇಪ್ಪತ್ತು ವರ್ಷ ಮತ್ತು ಅದಕ್ಕೆ ಮೇಲ್ಪಟ್ಟ
ಲೇವಿಯವರನ್ನು ಮೇಲ್ವಿಚಾರಕರನ್ನಾಗಿ ಅವರು
ನೇಮಿಸಿದರು. 9ದೇವಾಲಯವನ್ನು ಕಟ್ಟುವ ಕೆಲಸವನ್ನು
ಮೇಲ್ವಿಚಾರಣೆ ಮಾಡಿದವರು ಕೆಳಕಂಡಂತಿರುವರು.
ಯೇಷೂವನೂ ಅವನ ಮಕ್ಕಳೂ; ಕದ್ಮೀಯೇಲನು
ಮತ್ತು ಅವನ ಮಕ್ಕಳು (ಇವರು ಯೆಹೂದ ಸಂತತಿಯ
ವರು.); ಲೇವಿಯನಾದ ಹೇನಾದಾದನ ಗಂಡುಮಕ್ಕಳು
ಮತ್ತು ಅವನ ಅಣ್ಣತಮ್ಮಂದಿರು. 10ಕಟ್ಟುವವರು
ದೇವಾಲಯದ ಅಸ್ತಿವಾರವನ್ನು ಕಟ್ಟಿ ಮುಗಿಸಿದಾಗ
ಯಾಜಕರು ತಮ್ಮ ಯಾಜಕ ಬಟ್ಟೆಗಳನ್ನು ಧರಿಸಿ
ತುತ್ತೂರಿಗಳನ್ನು ತೆಗೆದುಕೊಂಡರು; ಆಸಾಫನ ಮಕ್ಕಳು
ತಾಳಗಳನ್ನು ತೆಗೆದುಕೊಂಡರು; ಅಲ್ಲದೆ ಇಸ್ರೇಲಿನ
ಅರಸನಾದ ದಾವೀದನು ನೇಮಿಸಿದ ಕ್ರಮಕ್ಕನುಸಾರ
ವಾಗಿ ತಮ್ಮತಮ್ಮ ಸ್ಥಳಗಳಲ್ಲಿ ನಿಂತುಕೊಂಡು ಯೆಹೋವ
ನನ್ನು ಸ್ತುತಿಸಿದರು. 11ಯೆಹೋವನು ಒಳ್ಳೆಯವನು;
ಆತನಿಗೆ ಕೃತಜ್ಞತಾಸ್ತುತಿ ಮಾಡಿರಿ. ಆತನ ಕರುಣೆ ಮತ್ತು
ನಿಜಪ್ರೀತಿ ಇಸ್ರೇಲರಿಗೆ ಶಾಶ್ವತವಾಗಿದೆ ಎಂದು ಹಾಡಿ
ದರು. ಆಗ ಉಳಿದವರು ಸಂತೋಷದಿಂದ ಆರ್ಬಟಿ
ಸಿದರು; ದೇವಾಲಯದ ಅಸ್ತಿವಾರ ಹಾಕಿದ್ದಕ್ಕೆ
ಯೆಹೋವನನ್ನು ಸ್ತುತಿಸಿದರು.
12ಆದರೆ ಮೊದಲಿನ ದೇವಾಲಯವನ್ನೂ ಅದರ ವೈಭವ
ವನ್ನೂ ನೋಡಿದ್ದ ಕುಲಪ್ರಧಾನರು, ಯಾಜಕರು ಮತ್ತು
ಲೇವಿಯರು ಗಟ್ಟಿಯಾಗಿ ಅತ್ತರು. ಇತರರು ಗಟ್ಟಿಯಾಗಿ
ಹರ್ಷಧ್ವನಿ ಮಾಡಿದರು. 13ಅವರ ಉತ್ಸಾಹಧ್ವನಿಯಲ್ಲಿ
ಹರ್ಷಧ್ವನಿ ಯಾವುದು ಅಳುವವರ ಧ್ವನಿ ಯಾವುದು
ಎಂದು ತಿಳಿಯುತ್ತಿರಲಿಲ್ಲ. ಆದರೆ ಆ ಧ್ವನಿಯು ಬಹು
ದೂರದವರೆಗೂ ಕೇಳಿಸಿತು.

### ದೇವಾಲಯವನ್ನು ಕಟ್ಟುವ ಕಾರ್ಯವನ್ನು ವಿರೋಧಿಸಿದ ವೈರಿಗಳು

4 1-2ಆ ಪ್ರಾಂತ್ಯದಲ್ಲಿ ವಾಸಿಸುತ್ತಿದ್ದ ಬೇರೆ ಜನರು
ಯೆಹೂದ ಮತ್ತು ಬೆನ್ಯಾಮೀನ್ ಕುಲಗಳ ಜನರಿಗೆ
ವಿರುದ್ಧವಾಗಿದ್ದರು. ಸೆರೆಯಿಂದ ಬಂದ ಜನರು
ಇಸ್ರೇಲರ ದೇವರಾದ ಯೆಹೋವನ ದೇವಾಲಯವನ್ನು
ಕಟ್ಟುತ್ತಿದ್ದಾರೆಂಬ ವರ್ತಮಾನವನ್ನು ವೈರಿಗಳು ಕೇಳಿ
ಜೆರುಬ್ಬಾಬೆಲನ ಬಳಿಗೂ ಮತ್ತು ಕುಲಪ್ರಧಾನರ
ಬಳಿಗೂ ಬಂದು, ‘‘ಕಟ್ಟುವ ಕಾರ್ಯದಲ್ಲಿ ನಿಮಗೆ
ಸಹಾಯ ಮಾಡಲು ಬಂದಿದ್ದೇವೆ. ನಾವು ಸಹ
ನಿಮ್ಮಂತೆಯೇ ದೇವರನ್ನು ಪ್ರಾರ್ಥಿಸುತ್ತೇವೆ. ಅಶ್ಶೂರದ
ರಾಜನಾದ ಏಸರ್ಹದ್ದೋನನು ನಮ್ಮನ್ನು ಇಲ್ಲಿಗೆ ತಂದು
ಬಿಟ್ಟಂದಿನಿಂದ ನಾವು ನಿಮ್ಮ ದೇವರನ್ನೇ
ಆರಾಧಿಸುತ್ತೇವೆ’’ ಅಂದರು.
3ಆದರೆ ಜೆರುಬ್ಬಾಬೆಲ್, ಯೇಷೂವ ಮತ್ತು ಗೋತ್ರ
ಪ್ರಧಾನರು ಅವರಿಗೆ ಹೇಳಿದ್ದೇನಂದರೆ: ‘‘ನೀವು ನಮ್ಮ
ದೇವರಿಗೆ ದೇವಾಲಯವನ್ನು ಕಟ್ಟಬಾರದು. ನಾವು
ಮಾತ್ರವೇ ಕಟ್ಟಬಹುದು. ಯಾಕಂದರೆ ಆತನು ಇಸ್ರೇಲ್
ಜನರ ದೇವರು. ಪರ್ಶಿಯ ರಾಜನಾದ ಸೈರಸನು ಅದೇ
ರೀತಿಯಾಗಿ ನಮಗೆ ಅಪ್ಪಣೆ ಮಾಡಿರುತ್ತಾನೆ.’’
4ಇದನ್ನು ಕೇಳಿ ಅವರಿಗೆ ಸಿಟ್ಟುಬಂತು. ಮತ್ತು
ಯೆಹೂದ್ಯರಿಗೆ ಉಪದ್ರವ ಕೊಡಲು ಪ್ರಾರಂಭಿಸಿದರು.
ದೇವಾಲಯವನ್ನು ಕಟ್ಟುವ ಕೆಲಸವನ್ನು ನಿಲ್ಲಿಸಲೂ
ಕಟ್ಟುವವರನ್ನು ನಿರಾಶೆಪಡಿಸಲೂ ಪ್ರಯತ್ನಿಸಿದರು.
5ಸರಕಾರದ ಅಧಿಕಾರಿಗಳಿಗೆ ಲಂಚಕೊಟ್ಟು ಯೆಹೂದ
ಜನರ ವಿರುದ್ಧವಾಗಿರಲು ಪ್ರೋತ್ಸಾಹಿಸಿದರು.
ಯೆಹೂದ್ಯರು ದೇವಾಲಯ ಕಟ್ಟುವ ಕಾರ್ಯವನ್ನು
ನಿಲ್ಲಿಸಲು ಈ ಅಧಿಕಾರಿಗಳು ಪದೇಪದೇ ತೊಂದರೆ
ಪಡಿಸಿದರು. ಪರ್ಶಿಯಾದ ಅರಸನಾದ ಸೈರಸನ ರಾಜ್ಯ
ಭಾರದ ಆಳ್ವಿಕೆಯಲ್ಲಿಯೂ ಅವನ ನಂತರ ಪಟ್ಟಕ್ಕೆ ಬಂದ
ದಾರ್ಯಾವೆಷನ ಆಳ್ವಿಕೆಯಲ್ಲಿಯೂ ಇದೇ ರೀತಿ
ಮುಂದುವರಿಯಿತು. 6ಆ ಶತ್ರುಗಳು ಪರ್ಶಿಯ ರಾಜನಿಗೆ
ಪತ್ರವನ್ನು ಬರೆದು ದೇವಾಲಯವನ್ನು ಕಟ್ಟುವ ಕಾರ್ಯ
ವನ್ನು ನಿಲ್ಲಿಸಬೇಕೆಂದು ಬೇಡಿಕೊಂಡರು. ಅಹಷ್ವೇ
ರೋಷನು ಪರ್ಶಿಯ ದೇಶದ ಅರಸನಾದಾಗ ಅವನಿಗೆ
ಪತ್ರ ಬರೆದರು.

### ಜೆರುಸಲೇಮ್ ನಗರವನ್ನು ಕಟ್ಟುವ ಕಾರ್ಯಕ್ಕೆ ವಿರೋಧಿಸಿದ ಶತ್ರುಗಳು

7ಅರ್ತಷಸ್ತನು ಪರ್ಶಿಯಾದ ರಾಜನಾದಾಗ
ಬಿಷ್ಲಾಮ್, ಮಿತ್ರದಾತ್ ಮತ್ತು ಟಾಬೆಯೇಲ್ ಈ
ಮೊದಲಾದವರು ಯೆಹೂದ್ಯರ ವಿರುದ್ಧವಾಗಿ ರಾಜನಿಗೆ
ಆಪಾದನಾ ಪತ್ರವನ್ನು ಆರಮೇಯಿಕ್ ಭಾಷೆಯ
ಲ್ಲಿಯೂ ಅದರ ಲಿಪಿಯಲ್ಲಿಯೂ ಬರೆದರು.
8ಅದಕ್ಕೆ ದೇಶಾಧಿಪತಿಯಾದ ರೆಹೂಮ ಮತ್ತು
ಕಾರ್ಯದರ್ಶಿಯಾದ ಶಿಂಷೈ ಜೆರುಸಲೇಮಿನ ನಿವಾಸಿಗಳ
ವಿರುದ್ಧವಾಗಿ ರಾಜ ಅರ್ತಷಸ್ತನಿಗೆ ಈ ರೀತಿ ಬರೆದರು:

[9]ದೇಶಾಧಿಪತಿಯಾದ ರೆಹೂಮ, ಕಾರ್ಯದರ್ಶಿ
ಯಾದ ಶಿಂಷೈ ಇವರೂ ಇವರ ಜೊತೆಗಾರರಾದ
ಟರ್ಪಲಾಯರು, ಪರ್ಶಿಯದವರು, ಯೆರೆಕ್ಯರು,
ಬಾಬಿಲೋನಿನವರು, ಕೂಷನಿನ ಏಲಾಮ್ಯರು,
[10]ಮತ್ತು ಮಹಾ ಬಲಿಷ್ಟನಾದ ಅಷೂರ್‌ಬನಿ
ಪಾಲನು ಕರೆತಂದು ಸಮಾರ್ಯ ಮತ್ತು ಯೂಫ್ರೇ
ಟೀಸ್ ನದಿಯ ಪಶ್ಚಿಮ ಪ್ರಾಂತ್ಯಗಳಲ್ಲಿ ಇರಿಸಿದ
ಇತರ ಜನರು,
[11]ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯದಲ್ಲಿ
ವಾಸಿಸುವ ಸೇವಕರು ಅರ್ತಷಸ್ತ ರಾಜನಿಗೆ
ಬರೆಯುವ ಪತ್ರ:

[12]ಅರ್ತಷಸ್ತರಾಜರೇ, ನಿಮ್ಮ ಸನ್ನಿಧಾನದಲ್ಲಿ
ನಾವು ತಿಳಿಸುವ ವಿಷಯವೇನಂದರೆ, ನೀವು ಕಳುಹಿಸಿ
ರುವ ಯೆಹೂದ್ಯರು ಇಲ್ಲಿಗೆ ಬಂದಿದ್ದಾರೆ. ಅವರು
ತಮ್ಮ ನಗರವಾದ ಜೆರುಸಲೇಮನ್ನು ತಿರುಗಿ
ಕಟ್ಟುತ್ತಿದ್ದಾರೆ. ಜೆರುಸಲೇಮ್ ಕೆಟ್ಟ ನಗರವಾಗಿದೆ.
ಅದರ ನಿವಾಸಿಗಳು ಯಾವಾಗಲೂ ಬೇರೆ ಅರಸು
ಗಳಿಗೆ ಎದುರು ಬೀಳುವವರಾಗಿದ್ದಾರೆ. ಈಗ ಆ
ಯೆಹೂದ್ಯರು ಅಸ್ತಿವಾರವನ್ನು ಹಾಕಿ ಗೋಡೆಯನ್ನು
ಕಟ್ಟುತ್ತಿದ್ದಾರೆ.
[13]ಅದೇ ಸಮಯದಲ್ಲಿ ರಾಜರೇ, ನೀವು ತಿಳಿಯ
ಬೇಕಾದ ವಿಷಯವೇನಂದರೆ, ಜೆರುಸಲೇಮ್
ಮತ್ತು ಅದರ ಪೌಳಿಗೋಡೆಗಳು ಕಟ್ಟಲ್ಪಟ್ಟಲ್ಲಿ
ಅಲ್ಲಿಯ ಪ್ರಜೆಗಳು ತೆರಿಗೆ ಕೊಡುವುದನ್ನು ನಿಲ್ಲಿಸು
ವರು. ನಿನಗೆ ಕಪ್ಪ ಸಲ್ಲಿಸುವುದನ್ನೂ ನಿಲ್ಲಿಸುವರು
ಮತ್ತು ಇತರ ತೆರಿಗೆಗಳನ್ನು ಕೊಡುವುದನ್ನೂ
ನಿಲ್ಲಿಸುವರು, ಇದರಿಂದಾಗಿ ರಾಜರಿಗೆ ದೊಡ್ಡ ನಷ್ಟ
ವಾಗಲಿದೆ.
[14]ರಾಜನ ಮೇಲೆ ನಮಗೆ ಜವಾಬ್ದಾರಿ ಇದೆ.
ಅಂಥಾ ಸಂಗತಿಗಳು ನಡೆಯಲು ನಾವು ಇಷ್ಟಪಡುವು
ದಿಲ್ಲ. ಆದುದರಿಂದಲೇ ರಾಜರಿಗೆ ಈ ಪತ್ರವನ್ನು
ಕಳುಹಿಸುತ್ತಿದ್ದೇವೆ.
[15]ರಾಜನಾದ ಅರ್ತಷಸ್ತನೇ, ನಿಮಗಿಂತ
ಮೊದಲು ಆಳಿದ ರಾಜರ ಬಗ್ಗೆ ಬರೆದ ವೃತ್ತಾಂತ
ವನ್ನು ಓದಿರಿ ಎಂದು ನಿಮ್ಮನ್ನು ವಿನಂತಿಸುತ್ತೇವೆ.
ಜೆರುಸಲೇಮ್ ಯಾವಾಗಲೂ ಇತರ ರಾಜರು
ಗಳಿಗೆ ಎದುರು ಬೀಳುವುದನ್ನು ನೀವು ಅದರಲ್ಲಿ
ಕಂಡುಕೊಳ್ಳುವಿರಿ. ಬೇರೆ ರಾಜರಿಗೆ ಮತ್ತು ದೇಶ
ಗಳವರಿಗೆ ತುಂಬಾ ಕಷ್ಟಕ್ಕೆ ಒಳಪಡಿಸಿದ್ದು ಮಾತ್ರ
ವಲ್ಲ, ಪೂರ್ವ ಕಾಲದಿಂದಲೂ ಈ ನಗರದಿಂದ
ಎಷ್ಟೋ ದಂಗೆಗಳು ಎದ್ದಿವೆ. ಆ ಕಾರಣಕ್ಕಾಗಿಯೇ
ಜೆರುಸಲೇಮ್ ನಾಶಮಾಡಲ್ಪಟ್ಟಿತ್ತು.
[16]ರಾಜನಾದ ಅರ್ತಷಸ್ತನೇ, ಈ ಪಟ್ಟಣ ಮತ್ತು
ಅದರ ಪೌಳಿಗೋಡೆಗಳು ತಿರಿಗಿ ಕಟ್ಟಲ್ಪಟ್ಟರೆ ನೀವು
ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯಗಳ
ಮೇಲಿನ ನಿಯಂತ್ರಣವನ್ನು ಕಳೆದುಕೊಳ್ಳುವಿರಿ.

[17]ಈ ಪತ್ರಕ್ಕೆ ಅರಸನಾದ ಅರ್ತಷಸ್ತನು ಈ ರೀತಿಯಾಗಿ
ಉತ್ತರಿಸಿದನು.

ದೇಶಾಧಿಪತಿಯಾದ ರೆಹೂಮನಿಗೂ ಕಾರ್ಯ
ದರ್ಶಿಯಾದ ಶಿಂಷೈಗೂ ಮತ್ತು ಸಮಾರ್ಯದಲ್ಲೂ
ಯೂಫ್ರೇಟೀಸ್ ಪಶ್ಚಿಮ ಪ್ರಾಂತ್ಯದಲ್ಲಿ ವಾಸಿಸುವ
ಜನರಿಗೆ ವಂದನೆಗಳು.
[18]ನೀವು ಕಳುಹಿಸಿದ ಪತ್ರವನ್ನು ಭಾಷಾಂತರ
ಮಾಡಿ ನನಗೆ ತಿಳಿಸಲಾಯಿತು. [19]ಹಿಂದಿನ ರಾಜರ
ವೃತ್ತಾಂತ ಪುಸ್ತಕಗಳನ್ನು ಶೋಧಿಸಲು ನಾನು ಆಜ್ಞೆ
ಕೊಟ್ಟೆನು. ಆ ವೃತ್ತಾಂತಗಳನ್ನು ಓದಿದಾಗ, ರಾಜರ
ವಿರುದ್ಧವಾದ ದಂಗೆಯ ದೀರ್ಘ ಇತಿಹಾಸವನ್ನು
ಜೆರುಸಲೇಮ್ ಹೊಂದಿರುವುದು ನಮಗೆ ತಿಳಿದು
ಬಂತು. ಜೆರುಸಲೇಮಿನಲ್ಲಿ ದಂಗೆ ಮತ್ತು ಪ್ರತಿ
ಭಟನೆ ಆಗಾಗ್ಗೆ ನಡೆದಿದ್ದವು. [20]ಬಲಿಷ್ಠ·ರಾಜರು
ಜೆರುಸಲೇಮನ್ನು ಮತ್ತು ಯೂಫ್ರೇಟೀಸ್ ನದಿಯ
ಪಶ್ಚಿಮ ಪ್ರಾಂತ್ಯವನ್ನೆಲ್ಲಾ ಆಳಿದರು. ಅವರಿಗೆ ಕಪ್ಪ,
ಸುಂಕ, ತೆರಿಗೆಗಳನ್ನು ಸಲ್ಲಿಸಲಾಗುತ್ತಿತ್ತು.
[21]ಈಗ ನೀವು ಜೆರುಸಲೇಮ್‌ನಲ್ಲಿ ನಡೆಯುವ
ಕೆಲಸವನ್ನು ನಿಲ್ಲಿಸುವಂತೆ ಆಜ್ಞಾಪಿಸಬೇಕು. ನಾನು
ತಿಳಿಸುವ ತನಕ ಅದು ತಿರಿಗಿ ಕಟ್ಟಲ್ಪಡಬಾರದು.
[22]ಈ ವಿಷಯದಲ್ಲಿ ನೀವು ಅಜಾಗರೂಕರಾಗಬಾರ
ದೆಂದು ನಿಮ್ಮನ್ನು ಎಚ್ಚರಿಸುತ್ತೇನೆ. ಜೆರುಸಲೇಮಿನ
ಕಟ್ಟುವಿಕೆಯು ಮುಂದುವರಿಯ ಬಾರದು.
ಮುಂದುವರಿದರೆ ನನಗೆ ಆ ಪ್ರಾಂತ್ಯದಿಂದ ದೊರಕ
ಬೇಕಾದ ಹಣವು ದೊರಕುವುದಿಲ್ಲ.''

[23]ರಾಜನಾದ ಅರ್ತಷಸ್ತನು ಬರೆದ ಪತ್ರವನ್ನು
ರೆಹೂಮನಿಗೂ ಕಾರ್ಯದರ್ಶಿ ಶಿಂಷೈಗೂ ಅವ
ರೊಂದಿಗಿದ್ದ ಜನರ ಮುಂದೆ ಓದಲಾಯಿತು. ಆ
ಕೂಡಲೇ ಅವರು ಬೇಗನೆ ಜೆರುಸಲೇಮಿನಲ್ಲಿದ್ದ ಯೆಹೂ
ದ್ಯರ ಬಳಿಗೆ ಹೋಗಿ ಅಲ್ಲಿ ನಡೆಯುತ್ತಿದ್ದ ಕೆಲಸವನ್ನು
ಬಲವಂತದಿಂದ ನಿಲ್ಲಿಸಿದರು.

### ದೇವಾಲಯ ಕಟ್ಟುವ ಕೆಲಸ ನಿಲ್ಲಿಸಲ್ಪಟ್ಟಿದ್ದು

[24]ಜೆರುಸಲೇಮಿನಲ್ಲಿ ಯೆಹೋವನ ಆಲಯದ
ಕಾರ್ಯವು ನಿಂತಿತು. ಪರ್ಶಿಯ ರಾಜ ದಾರ್ಯಾವೆಷನ
ಆಳ್ವಿಕೆಯ ಎರಡನೆಯ ವರುಷದ ತನಕ ಕೆಲಸವು
ಮುಂದುವರೆಯಲಿಲ್ಲ.

### ದಾರ್ಯಾವೆಷನ ರಾಜಾಜ್ಞೆ

5 ಆ ಸಮಯಗಳಲ್ಲಿ ಪ್ರವಾದಿಗಳಾದ ಹಗ್ಗಾಯನೂ
ಇದ್ದೋವಿನ ಮಗನಾದ ಜೆಕರ್ಯನೂ ದೇವರ
ಹೆಸರಿನಲ್ಲಿ ಪ್ರವಾದಿಸುತ್ತಿದ್ದರು. ಯೆಹೂದ ಪ್ರಾಂತ್ಯ
ದಲ್ಲಿದ್ದ ಮತ್ತು ಜೆರುಸಲೇಮಿನಲ್ಲಿದ್ದ ಯೆಹೂದ್ಯರನ್ನು
ಅವರು ಪ್ರೋತ್ಸಾಹಿಸಿದರು. 2ಶೆಯೆಲ್ತಿಯೇಲನ ಮಗ
ನಾದ ಜೆರುಬ್ಬಾಬೇಲ್ ಮತ್ತು ಯೋಚಾದಾಕನ ಮಗ
ನಾದ ಯೇಷೂವನೂ ಜೆರುಸಲೇಮಿನಲ್ಲಿ ದೇವಾಲಯ
ವನ್ನು ಕಟ್ಟುವ ಕಾರ್ಯವನ್ನು ಮತ್ತೆ ಪ್ರಾರಂಭಿಸಿದರು.
ದೇವರ ಪ್ರವಾದಿಗಳೆಲ್ಲರೂ ಅವರೊಂದಿಗಿದ್ದು ಅವರನ್ನು
ಪ್ರೋತ್ಸಾಹಪಡಿಸುತ್ತಿದ್ದರು.

3ಆ ಸಮಯದಲ್ಲಿ ಯೂಫ್ರೇಟೀಸ್ ನದಿಯ ಪಶ್ಚಿಮ
ಪ್ರಾಂತ್ಯದ ರಾಜ್ಯಪಾಲನಾಗಿದ್ದ ತತ್ತೆನೈ ಮತ್ತು
ಶೆತರ್ಬೋಜೆನೈ ಮತ್ತು ಅವರ ಸಂಗಡಿಗರು ಜೆರುಬ್ಬಾ
ಬೆಲ್, ಯೇಷೂವ ಮತ್ತು ಅವರ ಜೊತೆಗಾರರ ಬಳಿ
ಬಂದು, ''ನಿಮಗೆ ದೇವಾಲಯವನ್ನು ಮತ್ತೆ ಕಟ್ಟಲೂ
ಅದನ್ನು ಹೊಸದಾಗಿ ಮಾಡಲೂ ಅಪ್ಪಣೆಕೊಟ್ಟವರು
ಯಾರು? 4ಈ ಕಾರ್ಯದಲ್ಲಿ ಕೆಲಸ ಮಾಡುವವರ ಹೆಸರು
ಗಳೇನು?'' ಎಂದು ವಿಚಾರಿಸಿದರು.

5ಆದರೆ ಯೆಹೂದ್ಯರ ನಾಯಕರ ಮೇಲೆ ದೇವರ
ಕೃಪಾಕಟಾಕ್ಷವಿತ್ತು. ರಾಜನಾದ ದಾರ್ಯಾವೆಷನಿಗೆ ವರದಿ
ತಲುಪಿ ಉತ್ತರವನ್ನು ಕಳುಹಿಸುವ ತನಕ ನಾಯಕರು
ಕಟ್ಟಡದ ಕೆಲಸವನ್ನು ಮುಂದುವರಿಸುತ್ತಲೇ ಇದ್ದರು.

6ಯೂಫ್ರೇಟೀಸ್ ನದಿಯ ಪಶ್ಚಿಮದ ಪ್ರಾಂತ್ಯದ
ರಾಜ್ಯಪಾಲ ತತ್ತೆನೈ, ಶೆತರ್ಬೋಜೆನೈ ಮತ್ತು ಪ್ರಮುಖರು
ರಾಜನಾದ ದಾರ್ಯಾವೆಷನಿಗೆ ಪತ್ರ ಬರೆದರು. 7ಪತ್ರದ
ನಕಲು ಹೀಗಿದೆ:

ಅರಸನಾದ ದಾರ್ಯಾವೆಷನಿಗೆ ವಂದನೆಗಳು.

8ರಾಜನೇ, ನಾವು ಯೆಹೂದ ಪ್ರಾಂತ್ಯವನ್ನು
ಸಂದರ್ಶಿಸಿದ್ದೇವೆಂದು ನಿಮಗೆ ತಿಳಿಸುತ್ತೇವೆ. ಅಲ್ಲಿ
ಮಹೋನ್ನತ ದೇವರ ಆಲಯವನ್ನು ನೋಡಿದೆವು.
ಯೆಹೂದ ಪ್ರಾಂತ್ಯದ ಜನರು ದೊಡ್ಡ ಕಲ್ಲುಗಳಿಂದ
ದೇವಾಲಯವನ್ನು ಕಟ್ಟುತ್ತಿದ್ದಾರೆ. ದೊಡ್ಡ ದೊಡ್ಡ
ಮರದ ತೊಲೆಗಳನ್ನು ಗೋಡೆಯ ಮೇಲೆ ಕುಳ್ಳಿರಿ
ಸಿದ್ದಾರೆ. ಯೆಹೂದ ಪ್ರಾಂತ್ಯದ ಜನರು ಜಾಗರೂ
ಕತೆಯಿಂದಲೂ ತುಂಬ ಪ್ರಯಾಸದಿಂದಲೂ
ಕಾರ್ಯವನ್ನು ನಡಿಸುತ್ತಿದ್ದಾರೆ. ಬಹಳ ವೇಗವಾಗಿ
ಕೆಲಸ ಮುಂದುವರಿಯುತ್ತಿರುವದರಿಂದ ದೇವಾಲ
ಯವು ಬೇಗನೆ ಸಂಪೂರ್ಣವಾಗಬಹುದು.

9''ದೇವಾಲಯವನ್ನು ಕಟ್ಟಲು ನಿಮಗೆ ಯಾರು
ಅಪ್ಪಣೆ ಕೊಟ್ಟರು?'' ಎಂದು ಅವರ ನಾಯಕರನ್ನು
ಪ್ರಶ್ನಿಸಿದೆವು. 10ಕೆಲಸಗಾರರ ಹೆಸರುಗಳನ್ನು ನಾವು
ಕೇಳಿದೆವು. ಅವರ ನಾಯಕರುಗಳ ಹೆಸರುಗಳನ್ನೂ
ಕೇಳಿದೆವು. ಆ ನಾಯಕರುಗಳು ಯಾರೆಂದು ನಿಮಗೆ
ತಿಳಿಯುವಂತೆ ಅವರ ಹೆಸರುಗಳನ್ನು ನಿಮಗೆ ತಿಳಿಸ
ಬೇಕೆಂದಿದ್ದೆವು. 11ಆದಕ್ಕೆ ಅವರು ಈ ರೀತಿಯಾಗಿ
ಉತ್ತರಕೊಟ್ಟರು:

''ಭೂಪರಲೋಕಗಳ ದೇವರ ಸೇವಕರಾದ
ನಾವು ಬಹಳ ವರ್ಷಗಳ ಹಿಂದೆ ಇಸ್ರೇಲರ ರಾಜನು
ಕಟ್ಟಿಸಿ ಮುಗಿಸಿದ ದೇವಾಲಯವನ್ನು ಮತ್ತೆ ಕಟ್ಟುತ್ತಿ
ದ್ದೇವೆ. 12ನಮ್ಮ ಪೂರ್ವಿಕರು ಪರಲೋಕದ ನಮ್ಮ
ದೇವರನ್ನು ಸಿಟ್ಟಿಗೆಬ್ಬಿಸಿದರು. ಆಗ ಆತನು ಬಾಬಿ
ಲೋನಿನ ಅರಸನಾದ ನೆಬೂಕದ್ನೆಚ್ಚರನಿಗೆ ನಮ್ಮ
ಪೂರ್ವಿಕರನ್ನು ಕೊಟ್ಟುಬಿಟ್ಟನು. ನೆಬೂಕದ್ನೆಚ್ಚ
ರನು ದೇವಾಲಯವನ್ನು ಹಾಳುಗೆಡವಿ ಜನರನ್ನು
ಬಲವಂತದಿಂದ ಸೆರೆಯಾಗಿ ಬಾಬಿಲೋನಿಗೆ
ಒಯ್ದನು. 13ಅನಂತರ ಬಾಬಿಲೋನಿನ ಅರಸನಾದ
ಸೈರಸನ ಆಳ್ವಿಕೆಯ ಮೊದಲನೆಯ ವರ್ಷದಲ್ಲಿ
ದೇವಾಲಯವನ್ನು ತಿರಿಗಿ ಕಟ್ಟಲು ವಿಶೇಷ ಅನುಮತಿ
ಯನ್ನು ಕೊಟ್ಟನು. 14ಹಿಂದಿನ ಕಾಲದಲ್ಲಿ ನೆಬೂಕ
ದ್ನೆಚ್ಚರನು ಜೆರುಸಲೇಮಿನ ದೇವಾಲಯದಿಂದ ಬೆಳ್ಳಿ
ಬಂಗಾರಗಳ ವಸ್ತುಗಳನ್ನು ತೆಗೆದುಕೊಂಡು ಬಂದು
ಬಾಬಿಲೋನಿನಲ್ಲಿದ್ದ ತನ್ನ ವಿಗ್ರಹಾಲಯದಲ್ಲಿಟ್ಟಿ
ದ್ದನು. ಆಲಯದಿಂದ ತೆಗೆದುಕೊಂಡು ಬಂದಿದ್ದ ಆ
ಬೆಳ್ಳಿಬಂಗಾರದ ವಸ್ತುಗಳನ್ನು ಸೈರಸನು ಬಾಬಿ
ಲೋನಿನ ತನ್ನ ವಿಗ್ರಹಾಲಯದಿಂದ ತೆಗೆದು
ಶೆಷ್ಬಚ್ಚರನಿಗೆ (ಜೆರುಬ್ಬಾಬೆಲನಿಗೆ) ಕೊಟ್ಟು ಅವ
ನನ್ನು ದೇಶಾಧಿಪತಿಯನ್ನಾಗಿ ನೇಮಿಸಿದನು.''

15ಅರಸನಾದ ಸೈರಸನು ಶೆಷ್ಬಚ್ಚರನಿಗೆ (ಜೆರುಬ್ಬಾ
ಬೆಲನಿಗೆ), ''ಈ ಬೆಳ್ಳಿಬಂಗಾರಗಳ ವಸ್ತುಗಳನ್ನು
ತೆಗೆದುಕೊಂಡು ಜೆರುಸಲೇಮಿನ ದೇವಾಲಯ
ದಲ್ಲಿಡು. ಹಿಂದೆ ದೇವಾಲಯವು ಎಲ್ಲಿ ಇತ್ತೋ
ಅದೇ ಸ್ಥಳದಲ್ಲಿ ಅದನ್ನು ಪುನಃ ಕಟ್ಟು.'' 16ಹೀಗೆ
ಶೆಷ್ಬಚ್ಚರನು (ಜೆರುಬ್ಬಾಬೆಲ್), ಜೆರುಸಲೇಮಿನಲ್ಲಿ
ದೇವರ ಆಲಯಕ್ಕೆ ಅಸ್ತಿವಾರವನ್ನು ಹಾಕಿದನು.
ಅಂದಿನಿಂದ ಇಂದಿನ ತನಕ ಕೆಲಸವು ಮುಂದುವರಿ
ಯುತ್ತಲೇ ಇದೆ. ಆದರೆ ಅದು ಇನ್ನೂ ಸಂಪೂರ್ಣ
ವಾಗಿಲ್ಲ.''

17ರಾಜರಾದ ತಾವು ಅಪೇಕ್ಷಿಸಿದರೆ ರಾಜವೃತ್ತಾಂತ
ವನ್ನು ನೀವೇ ಪರಿಶೋಧಿಸಿ. ಜೆರುಸಲೇಮಿನಲ್ಲಿ
ಮತ್ತೆ ದೇವಾಲಯವನ್ನು ಕಟ್ಟಲು ರಾಜ ಸೈರಸನು
ಆಜ್ಞಾಪಿಸಿದ್ದು ನಿಜವೇ ಎಂಬುದನ್ನು ನೀವೇ

ನೋಡಿರಿ. ಆಮೇಲೆ, ಅರಸನೇ, ಇದರ ವಿಚಾರ
ವಾಗಿ ಏನು ತೀರ್ಮಾನ ಮಾಡಿದ್ದೀರೆಂದು ನಮಗೆ
ಪತ್ರದ ಮೂಲಕ ತಿಳಿಸಿರಿ.

### ದಾರ್ಯಾವೆಷನ ಆಜ್ಞೆ

6 ತನಗಿಂತ ಮೊದಲು ರಾಜರಾಗಿದ್ದವರ ವೃತ್ತಾಂತ
ಪುಸ್ತಕಗಳನ್ನು ತರಿಸಿ ದಾರ್ಯಾವೆಷನು ಶೋಧಿಸಿ
ದನು. ಈ ಪುಸ್ತಕಗಳು ರಾಜ ಖಜಾನೆಯಲ್ಲಿ ಇಡಲ್ಪ
ಟ್ಟಿದ್ದವು. 2 ಮೇದ್ಯ ಪ್ರಾಂತ್ಯದ ಎಕ್‌ಬಟಾನ ಎಂಬ ಕೋಟೆ
ಯೊಳಗೆ ಒಂದು ಸುರುಳಿಯು ದೊರಕಿತು. ಆ ಸುರುಳಿ
ಯಲ್ಲಿ ಈ ರೀತಿಯಾಗಿ ಬರೆದಿತ್ತು.:

ಸರಕಾರದ ಆಜ್ಞೆ
3 ರಾಜನಾದ ಸೈರಸನ ಆಳ್ವಿಕೆಯ ಮೊದಲನೆಯ
ವರ್ಷದಲ್ಲಿ ಜೆರುಸಲೇಮಿನಲ್ಲಿರುವ ದೇವಾಲಯದ
ವಿಷಯವಾಗಿ ಸೈರಸ ರಾಜನು ಹೊರಡಿಸಿದ
ರಾಜಾಜ್ಞೆ: ದೇವಾಲಯವು ಮತ್ತೆ ಕಟ್ಟಲ್ಪಡಲಿ. ಅದು
ಹೋಮಯಜ್ಞಾದಿಗಳನ್ನು ಸಮರ್ಪಿಸುವ ಸ್ಥಳ
ವಾಗಲಿ. ದೇವಾಲಯದ ಅಸ್ತಿವಾರವು ಬಲವಾಗಿರ
ಬೇಕು. ಅದರ ಎತ್ತರ ತೊಂಭತ್ತು ಅಡಿ ಇರಬೇಕು.
ಅದರ ಅಗಲ ತೊಂಭತ್ತು ಅಡಿ ಇರಬೇಕು. 4 ಅದರ
ಗೋಡೆಯಲ್ಲಿ ಮೂರುಸಾಲು ದೊಡ್ಡ ಗಾತ್ರದ
ಕಲ್ಲುಗಳಿರಬೇಕು; ಒಂದು ಸಾಲಿನಲ್ಲಿ ಮರದ
ತೊಲೆಗಳಿರಬೇಕು. ದೇವಾಲಯ ಕಟ್ಟಲು ತಗಲುವ
ಖರ್ಚುವೆಚ್ಚವೆಲ್ಲವನ್ನು ರಾಜನ ಖಜಾನೆಯಿಂದ
ಕೊಡಬೇಕು. 5 ಬೆಳ್ಳಿಬಂಗಾರಗಳ ವಸ್ತುಗಳೆಲ್ಲವನ್ನು
ಜೆರುಸಲೇಮಿನ ದೇವಾಲಯದಿಂದ ನೆಬೂಕದ್ನೆಚ್ಚ
ರನು ಸೂರೆಮಾಡಿ ಬಾಬಿಲೋನಿಗೆ ತಂದದ್ದನ್ನು
ದೇವಾಲಯದಲ್ಲಿ ಇಡಬೇಕು.

6 ಹೀಗಿರುವದರಿಂದ, ದಾರ್ಯಾವೇಷನಾದ
ನಾನು, ಯೂಫ್ರೇಟೀಸ್ ನದಿಯ ಪಶ್ಚಿಮ
ಪ್ರಾಂತ್ಯಕ್ಕೆ ರಾಜ್ಯಪಾಲನಾಗಿರುವ ತತ್ತೆನೈ ಎಂಬ
ನಿನಗೂ ಶೆತರ್ಬೋಜೆನೈ ಮತ್ತು ಆ ಪ್ರಾಂತ್ಯದ ಎಲ್ಲಾ
ಅಧಿಕಾರಿಗಳಿಗೂ ಆಜ್ಞೆ ಕೊಡುವದೇನಂದರೆ,
ಜೆರುಸಲೇಮಿನಿಂದ ನೀವು ದೂರವಾಗಿರಿ. 7 ಕೆಲಸ
ಮಾಡುವವರನ್ನು ತೊಂದರೆಪಡಿಸಬೇಡಿ. ದೇವಾ
ಲಯ ಕಟ್ಟುವ ಕೆಲಸವನ್ನು ನಿಲ್ಲಿಸುವ ಪ್ರಯತ್ನ
ಮಾಡಬೇಡಿ. ಯೆಹೂದ್ಯರ ದೇಶಾಧಿಪತಿ ಮತ್ತು
ಯೆಹೂದ್ಯ ನಾಯಕರು ಅದನ್ನು ಮತ್ತೆ ಕಟ್ಟಲಿ.
ಹಿಂದಿನ ದೇವಾಲಯವಿದ್ದಲ್ಲಿಯೇ ಹೊಸದನ್ನು
ಕಟ್ಟಲಿ.
8 ಈಗ ನಾನು ನಿಮಗೆ ಕೊಡುವ ಆಜ್ಞೆ ಏನೆಂದರೆ,
ದೇವಾಲಯ ಕಟ್ಟುವ ಯೆಹೂದ್ಯ ನಾಯಕರಿಗೆ
ನೀವು ಸಂಪೂರ್ಣ ಖರ್ಚನ್ನು ಸರಕಾರದ ಖಜಾನೆ
ಯಿಂದ ಕೊಡಬೇಕು. ಇದಕ್ಕೆ ಬೇಕಾದ ಹಣವನ್ನು
ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯದ ಜನ
ರಿಂದ ತೆರಿಗೆವಸೂಲಿ ಮಾಡಿದ ಹಣದಿಂದ ಕೊಡ
ಬೇಕು. ಈ ಕೆಲಸವನ್ನು ನೀವು ಬೇಗನೆ ಮಾಡಬೇಕು.
ದೇವಾಲಯದ ಕೆಲಸ ನಿಂತುಹೋಗಬಾರದು. 9 ಆ
ಜನರಿಗೆ ಏನು ಅವಶ್ಯಕತೆಯಿದೆಯೋ ಅದನ್ನು
ಪೂರೈಸಬೇಕು. ಅವರಿಗೆ ಎಳೆಹೋರಿಗಳು, ಟಗರು
ಗಳು, ಗಂಡುಕುರಿಗಳು ಪರಲೋಕದ ದೇವರಿಗೆ
ಯಜ್ಞವನ್ನರ್ಪಿಸಲು ಬೇಕಾಗಿದ್ದರೆ ಅವುಗಳನ್ನು
ಕೊಡಿರಿ. ಜೆರುಸಲೇಮಿನ ಯಾಜಕರು ಗೋಧಿ,
ಉಪ್ಪು, ದ್ರಾಕ್ಷಾರಸ, ಎಣ್ಣೆ ಬೇಕು ಎಂದು ಹೇಳಿದರೆ
ಅದನ್ನು ಪ್ರತಿದಿನ ತಪ್ಪದೆ ಒದಗಿಸಿರಿ. 10 ಅವುಗಳನ್ನು
ಜೆರುಸಲೇಮಿನ ಯಾಜಕರಿಗೆ ಕೊಡಿರಿ, ಅವು
ಗಳನ್ನು ಯಜ್ಞವಾಗಿ ಸಮರ್ಪಿಸಿದಾಗ ಪರಲೋಕದ
ದೇವರು ಅದನ್ನು ಮೆಚ್ಚುವನು. ಯಾಜಕರು ನನ
ಗಾಗಿಯೂ ನನ್ನ ಮಕ್ಕಳಿಗಾಗಿಯು ಪ್ರಾರ್ಥಿಸಲಿ.
11 ಮಾತ್ರವಲ್ಲದೆ, ನನ್ನ ಆಜ್ಞೆ ಏನೆಂದರೆ: ಯಾವ
ನಾದರೂ ನನ್ನ ಆಜ್ಞೆಯನ್ನು ಬದಲಾಯಿಸಿದರೆ
ಅವನ ಮನೆಯಿಂದಲೇ ಒಂದು ತೊಲೆಯನ್ನು
ಎಳೆದು ಅದನ್ನು ಶೂಲವನ್ನಾಗಿ ಮಾಡಿ, ಅವನನ್ನು
ಅದಕ್ಕೆ ನೇತು ಹಾಕಬೇಕು; ಅವನ ಮನೆಯನ್ನು
ಕೆಡವಿ ಅದನ್ನು ಮಣ್ಣುದಿಬ್ಬವನ್ನಾಗಿ ಮಾಡಬೇಕು.
12 ಜೆರುಸಲೇಮಿನಲ್ಲಿ ದೇವರು ತನ್ನ ಹೆಸರನ್ನು
ಸ್ಥಾಪಿಸಿರುತ್ತಾನೆ. ಆದುದರಿಂದ ಯಾವ ಅರಸ
ನಾಗಲೀ ಅಧಿಕಾರಿಯಾಗಲೀ ಈ ಆಜ್ಞೆಗೆ ವಿರುದ್ಧ
ವಾಗಿ ನಡೆದರೆ ದೇವರೇ ಅವನನ್ನು ಸೋಲಿಸುವನು;
ಯಾರಾದರೂ ಆ ದೇವಾಲಯವನ್ನು ಕೆಡವಲು
ಪ್ರಯತ್ನಿಸಿದರೆ ಅಂಥವರನ್ನು ದೇವರೇ ನಾಶ
ಮಾಡುವನು.

ಇದನ್ನು ದಾರ್ಯಾವೆಷನೆಂಬ ನಾನೇ ಆಜ್ಞಾಪಿಸಿ
ರುತ್ತೇನೆ. ಈ ಆಜ್ಞೆಯನ್ನು ಬೇಗನೆ ಮತ್ತು
ಸಂಪೂರ್ಣವಾಗಿ ನೆರವೇರಿಸಬೇಕು.

### ದೇವಾಲಯ ಸಂಪೂರ್ಣವಾದದ್ದು ಮತ್ತು ಅದರ ಪ್ರತಿಷ್ಠೆ

13 ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯದ
ರಾಜ್ಯಪಾಲನಾದ ತತ್ತೆನೈ, ಶೆತರ್ಬೋಜೆನೈ ಮತ್ತು ಅವರ
ಸಂಗಡವಿರುವ ಜನರು ರಾಜನಾದ ದಾರ್ಯಾವೆಷನ
ಆಜ್ಞೆಗೆ ಅತ್ಯಂತ ಶೀಘ್ರವಾಗಿ ಮತ್ತು ಸಂಪೂರ್ಣವಾಗಿ
ವಿಧೇಯರಾದರು. 14 ಹೀಗೆ ಯೆಹೂದ್ಯರ ಹಿರಿಯರು
ದೇವಾಲಯದ ಕಟ್ಟಡ ಕೆಲಸವನ್ನು ಮುಂದುವರಿಸಿದರು.

ಪ್ರವಾದಿಯಾದ ಹಗ್ಗೈನಂತೆ ಮತ್ತು ಇದ್ದೋವಿನ ಮಗನಾದ ಜೆಕರೀಯನಂತೆ ಅವರನ್ನು ಪ್ರೋತ್ಸಾಹಿಸುತ್ತಾ ಇದ್ದರು. ಆದ್ದರಿಂದ ಅವರು ಯಶಸ್ವಿಯಾದರು. ದೇವಾಲಯದ ಕೆಲಸ ಮುಗಿಯಿತು. ಇಸ್ರೇಲಿನ ದೇವರ ಆಜ್ಞೆಗೆ ವಿಧೇಯರಾಗಿಯೂ, ಸೈರಸ್, ದಾರ್ಯಾವೆಷ ಮತ್ತು ಅರ್ತಷಸ್ತ ಎಂಬ ಪರ್ಶಿಯ ಅರಸರ ಆಜ್ಞೆಗೆ ವಿಧೇಯರಾಗಿಯೂ ಕಟ್ಟಡದ ಕೆಲಸವನ್ನು ಸಂಪೂರ್ಣ ಮಾಡಿದರು.
15ಆಡಾರ್ ತಿಂಗಳಿನ ಮೂರನೆಯ ದಿನದಲ್ಲಿ ಅಂದರೆ ರಾಜ ದಾರ್ಯಾವೆಷನ ಆಳ್ವಿಕೆಯ ಆರನೆಯ ವರ್ಷದಲ್ಲಿ ದೇವಾಲಯವು ಸಂಪೂರ್ಣವಾಯಿತು.

16ಅನಂತರ ಇಸ್ರೇಲರೆಲ್ಲರೂ ಸೇರಿ ದೇವಾಲಯವನ್ನು ಅತ್ಯಂತ ಹರ್ಷದಿಂದ ಪ್ರತಿಷ್ಠೆ ಮಾಡಿದರು. ಸೆರೆವಾಸದಿಂದ ಹಿಂತಿರುಗಿ ಬಂದಿದ್ದ ಯಾಜಕರು, ಲೇವಿಯರು ಮತ್ತು ಎಲ್ಲಾ ಜನರು ಈ ಆಚರಣೆಯಲ್ಲಿ ಭಾಗವಹಿಸಿದರು.

17ಆ ದಿವಸ ಸರ್ವಾಂಗಹೋಮವಾಗಿ ನೂರು ಹೋರಿಗಳನ್ನೂ, ಇನ್ನೂರು ಟಗರುಗಳನ್ನೂ ನಾನೂರು ಕುರಿಮರಿಗಳನ್ನೂ ಸಮರ್ಪಿಸಿದರು. ಎಲ್ಲಾ ಇಸ್ರೇಲರ ದೋಷಪರಿಹಾರಕ್ಕಾಗಿ ಕುಲಕ್ಕೆ ಒಂದರಂತೆ ಹನ್ನೆರಡು ಹೋತಗಳನ್ನು ಅರ್ಪಿಸಿದರು.
18ಅನಂತರ ಯಾಜಕರನ್ನು ಮತ್ತು ಲೇವಿಯರನ್ನು ಅವರವರ ವರ್ಗಗಳಿಗನುಸಾರವಾಗಿ, ಮೋಶೆಯ ವಿಧಿಯಂತೆ ದೇವಾಲಯದಲ್ಲಿ ಸೇವೆ ಮಾಡುವುದಕ್ಕಾಗಿ ಆರಿಸಿದರು.

## ಪಸ್ಕ ಹಬ್ಬ

19ಮೊದಲನೇ ತಿಂಗಳ ಹದಿನಾಲ್ಕನೆಯ ದಿನದಂದು ಸೆರೆಯಿಂದ ಹಿಂತಿರುಗಿಬಂದಿದ್ದ ಯೆಹೂದ್ಯರು ಪಸ್ಕಹಬ್ಬವನ್ನು ಆಚರಿಸಿದರು.
20ಯಾಜಕರೂ ಲೇವಿಯರೂ ತಮ್ಮನ್ನು ಶುದ್ಧಮಾಡಿಕೊಂಡು ಹಬ್ಬವನ್ನು ಆಚರಿಸಲು ಸಿದ್ಧರಾದರು. ಪಸ್ಕದ ಕುರಿಮರಿಯನ್ನು ಎಲ್ಲಾ ಇಸ್ರೇಲರಿಗಾಗಿಯೂ ತಮಗಾಗಿಯೂ ಯಾಜಕರಿಗಾಗಿಯೂ ಲೇವಿಯರು ಕೊಂದರು.
21ಸೆರೆಯಿಂದ ಹಿಂತಿರುಗಿ ಬಂದಿದ್ದ ಇಸ್ರೇಲರೆಲ್ಲರೂ ಪಸ್ಕದ ಊಟವನ್ನು ಮಾಡಿದರು. ಉಳಿದವರು ಅನ್ಯರ ಜೊತೆಯಲ್ಲಿ ವಾಸಿಸುವುದರಿಂದ ತಮ್ಮನ್ನು ಶುದ್ಧಪಡಿಸಿಕೊಂಡವರೆಲ್ಲರೂ ಪಸ್ಕದ ಊಟದಲ್ಲಿ ಪಾಲು ತೆಗೆದುಕೊಂಡರು. ಇಸ್ರೇಲರ ದೇವರಾದ ಯೆಹೋವನ ಬಳಿಗೆ ಸಹಾಯಕ್ಕಾಗಿ ಹೋಗಲು ಸಾಧ್ಯವಾಗುವಂತೆ ಅವರು ಹೀಗೆ ಮಾಡಿದರು.
22ಹುಳಿಯಿಲ್ಲದ ರೊಟ್ಟಿಯ ಹಬ್ಬವನ್ನು ಅವರು ಏಳು ದಿನಗಳ ತನಕ ಸಂತಸದಿಂದ ಆಚರಿಸಿದರು. ಯಾಕೆಂದರೆ ಅಶ್ಶೂರದ ಅರಸನ ಮನಸ್ಸನ್ನು ಮಾರ್ಪಡಿಸುವುದರ ಮೂಲಕ ಯೆಹೋವನು ಯೆಹೂದ್ಯರನ್ನು ಬಹಳ ಸಂತೋಷಗೊಳಿಸಿದ್ದನು. ಇಸ್ರೇಲ್ ದೇವರ ಆಲಯದ ಕಟ್ಟಡವು ಪೂರ್ಣಗೊಳ್ಳಲು ಅಶ್ಶೂರದ ಅರಸನು ಸಹಾಯ ಮಾಡಿದನು.

## ಜೆರುಸಲೇಮಿಗೆ ಎಜ್ರನ ಆಗಮನ

7 ಇವೆಲ್ಲವೂ ಕಳೆದ ಬಳಿಕ, ಪರ್ಶಿಯ ರಾಜನಾದ ಅರ್ತಷಸ್ತನ ಆಳ್ವಿಕೆಯ ಕಾಲದಲ್ಲಿ ಎಜ್ರನು ಬಾಬಿಲೋನಿನಿಂದ ಜೆರುಸಲೇಮಿಗೆ ಬಂದನು. ಎಜ್ರನು ಸೆರಾಯನ ಮಗನು; ಸೆರಾಯನು ಅಜರ್ಯನ ಮಗನು; ಅಜರ್ಯನು ಹಿಲ್ಕೀಯನ ಮಗನು.
2ಹಿಲ್ಕೀಯನು ಶಲ್ಲೂಮನ ಮಗನು. ಶಲ್ಲೂಮನು ಚಾದೋಕನ ಮಗನು; ಚಾದೋಕನು ಅಹೀಟೂಬನ ಮಗನು.
3ಅಹೀಟೂಬನು ಅಮರ್ಯನ ಮಗನು; ಅಮರ್ಯನು ಅಜರ್ಯನ ಮಗನು. ಅಜರ್ಯನು ಮೆರಾಯೋತನ ಮಗನು;
4ಮೆರಾಯೋತನು ಜೆರಹ್ಯನ ಮಗನು; ಜೆರಹ್ಯನು ಉಜ್ಜೀಯನ ಮಗನು; ಉಜ್ಜೀಯನು ಬುಕ್ಕೀಯ ಮಗನು.
5ಬುಕ್ಕೀಯು ಅಬೀಷೂವನ ಮಗನು; ಅಬೀಷೂವನು ಫೀನೆಹಾಸನ ಮಗನು; ಫೀನೆಹಾಸನು ಎಲ್ಲಾಜಾರನ ಮಗನು. ಎಲ್ಲಾಜಾರನು ಪ್ರಧಾನ ಯಾಜಕನಾದ ಆರೋನನ ಮಗನು.

6ಎಜ್ರನು ಬಾಬಿಲೋನಿನಿಂದ ಜೆರುಸಲೇಮಿಗೆ ಬಂದನು. ಅವನು ವಿಧ್ವಾಂಸನಾಗಿದ್ದನು. ಇಸ್ರೇಲರ ದೇವರಾದ ಯೆಹೋವನು ಮೋಶೆಗೆ ಕೊಟ್ಟಿದ್ದ ಧರ್ಮಶಾಸ್ತ್ರವನ್ನು ಅವನು ಚೆನ್ನಾಗಿ ಬಲ್ಲವನಾಗಿದ್ದನು. ಯೆಹೋವನು ಎಜ್ರನೊಂದಿಗಿದ್ದುದರಿಂದ ಅವನು ಕೇಳಿದ್ದೆಲ್ಲವನ್ನು ಅರ್ತಷಸ್ತ ರಾಜನು ಅವನಿಗೆ ಕೊಟ್ಟನು.
7ಎಜ್ರನೊಂದಿಗೆ ಇಸ್ರೇಲರ ಬಹುಮಂದಿ ಜೆರುಸಲೇಮಿಗೆ ಬಂದರು. ಅವರಲ್ಲಿ ಯಾಜಕರೂ ಲೇವಿಯರೂ ಗಾಯಕರೂ ದ್ವಾರಪಾಲಕರೂ ದೇವಾಲಯದ ಸೇವಕರೂ ಇದ್ದರು. ಅರಸನಾದ ಅರ್ತಷಸ್ತನ ಆಳ್ವಿಕೆಯ ಏಳನೆಯ ವರ್ಷದಲ್ಲಿ ಅವರು ಜೆರುಸಲೇಮಿಗೆ ಬಂದು ತಲುಪಿದರು.
8ಅರ್ತಷಸ್ತನ ಆಳ್ವಿಕೆಯ ಏಳನೆಯ ವರ್ಷದ ಐದನೆಯ ತಿಂಗಳಲ್ಲಿ ಎಜ್ರನು ಜೆರುಸಲೇಮನ್ನು ತಲುಪಿದನು.
9ಅವರು ಬಾಬಿಲೋನನ್ನು ಮೊದಲನೆಯ ತಿಂಗಳಿನ ಮೊದಲನೆಯ ದಿನದಂದು ಬಿಟ್ಟು ಐದನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಜೆರುಸಲೇಮನ್ನು ಸೇರಿದರು. ದೇವರಾದ ಯೆಹೋವನು ಎಜ್ರನ ಸಂಗಡವಿದ್ದನು.
10ಧರ್ಮಶಾಸ್ತ್ರವನ್ನು ಓದಲೂ, ಅಭ್ಯಾಸಿಸಲೂ ಮತ್ತು ಅದಕ್ಕೆ ವಿಧೇಯನಾಗಲು ಎಜ್ರನು ತನ್ನ ಸಮಯವನ್ನೆಲ್ಲಾ ವಿನಿಯೋಗಿಸಿದನು. ಯೆಹೋವನ ಆಜ್ಞೆಗಳನ್ನು, ವಿಧಿನಿಯಮಗಳನ್ನು ಇಸ್ರೇಲ್ ಜನರಿಗೆ ಕಲಿಸಬೇಕೆಂಬ

ಇಚ್ಛೆ ಅವನಲ್ಲಿತ್ತು. ಯೆಹೋವನ ಕಟ್ಟಳೆಗಳಿಗೆ ವಿಧೇಯ
ರಾಗುವಂತೆ ಇಸ್ರೇಲರೆಲ್ಲರಿಗೆ ಸಹಾಯ ಮಾಡಬೇಕೆಂಬ
ಅಭಿಲಾಷೆಯು ಅವನಲ್ಲಿತ್ತು.

### ಎಜ್ರನಿಗೆ ಅರಸನಾದ ಅರ್ತಷಸ್ತನ ಪತ್ರ

[11]ಎಜ್ರನು ಯಾಜಕನೂ ಬೋಧಕನೂ ಆಗಿದ್ದನು.
ಯೆಹೋವನು ಇಸ್ರೇಲರಿಗೆ ಕೊಟ್ಟಿರುವ ಕಟ್ಟಳೆಗಳನ್ನು,
ವಿಧಿಗಳನ್ನು ಅವನು ಚೆನ್ನಾಗಿ ಅಭ್ಯಾಸ ಮಾಡಿಕೊಂಡಿ
ದ್ದನು. ರಾಜನಾದ ಅರ್ತಷಸ್ತನು ಅವನಿಗೆ ಕೊಟ್ಟಿದ್ದ
ಪತ್ರದಲ್ಲಿ ಹೀಗೆ ಬರೆದಿತ್ತು:

[12]“ಅರಸನಾದ ಅರ್ತಷಸ್ತನಿಂದ:

ಪರಲೋಕದ ದೇವರ ಕಟ್ಟಳೆಗಳ ಬೋಧಕನೂ
ಯಾಜಕನೂ ಆಗಿರುವ ಎಜ್ರನಿಗೆ ವಂದನೆಗಳು.
[13]ಈ ಆಜ್ಞೆಯನ್ನು ಕೊಡುವ ನಾನು ತಿಳಿಸುವುದೇ
ನಂದರೆ, ನನ್ನ ಸಾಮ್ರಾಜ್ಯದಲ್ಲಿರುವ ಇಸ್ರೇಲರ
ಯಾಜಕರು, ಲೇವಿಯರು, ಜನರೆಲ್ಲರೂ ಎಜ್ರ
ನೊಂದಿಗೆ ಜೆರುಸಲೇಮಿಗೆ ಹೋಗಲು ಇಚ್ಛಿಸುವು
ದಾದರೆ ಅವರು ಹೋಗಬಹುದು.
[14]ಎಜ್ರನೇ, ನಾನೂ ನನ್ನ ಏಳು ಮಂದಿ ಸಲಹೆ
ಗಾರರೂ ನಿನ್ನನ್ನು ಯೆಹೂದಕ್ಕೆ ಮತ್ತು ಜೆರುಸಲೇ
ಮಿಗೆ ಕಳುಹಿಸುತ್ತೇವೆ. ಅಲ್ಲಿ ನೀನೂ ನಿನ್ನ ಜನರೂ
ದೇವರ ಕಟ್ಟಳೆಗಳಿಗೆ ವಿಧೇಯರಾಗಿರುವಂತೆ
ನೋಡಿಕೋ. ಆ ಕಟ್ಟಳೆಗಳು ನಿನ್ನ ಬಳಿಯಲ್ಲಿ ಇವೆ.
[15]ನಾನೂ ನನ್ನ ಸಲಹೆಗಾರರೂ ಜೆರುಸಲೇಮಿ
ನಲ್ಲಿರುವ ಇಸ್ರೇಲಿನ ದೇವರಿಗೆ ಬೆಳ್ಳಿಬಂಗಾರ
ಗಳನ್ನು ಅರ್ಪಿಸುತ್ತೇವೆ. ನೀನು ಹೋಗುವಾಗ ಅವು
ಗಳನ್ನು ತೆಗೆದುಕೊಂಡು ಹೋಗಬೇಕು. [16]ದಾರಿ
ಯಲ್ಲಿ ಬಾಬಿಲೋನ್ ಸಾಮ್ರಾಜ್ಯದ ಎಲ್ಲಾ
ಸಂಸ್ಥಾನಗಳನ್ನು ಸಂದರ್ಶಿಸಬೇಕು. ಅಲ್ಲಿ ವಾಸಿಸುವ
ನಿನ್ನ ಜನರಿಂದಲೂ ಯಾಜಕರಿಂದಲೂ ಲೇವಿಯ
ರಿಂದಲೂ ಬೆಳ್ಳಿಬಂಗಾರಗಳನ್ನು ಕಾಣಿಕೆಯಾಗಿ
ಸ್ವೀಕರಿಸು. ಆ ಕಾಣಿಕೆಗಳು ಜೆರುಸಲೇಮಿನಲ್ಲಿರುವ
ದೇವಾಲಯಕ್ಕಾಗಿರುವುದು.
[17]ಆ ಹಣದಿಂದ ಹೋರಿಗಳನ್ನು ಟಗರುಗಳನ್ನು,
ಗಂಡುಕುರಿಗಳನ್ನು ಖರೀದಿಸಲು ಉಪಯೋಗಿಸು.
ಪಾನಾರ್ಪಣೆಗಳಿಗೆ ಮತ್ತು ಧಾನ್ಯಸಮರ್ಪಣೆಗಳಿಗೆ
ಬೇಕಾಗುವ ಗೋಧಿಯನ್ನೂ ದ್ರಾಕ್ಷಾರಸವನ್ನೂ
ತೆಗೆದುಕೊಂಡು ಜೆರುಸಲೇಮಿನ ಯಜ್ಞವೇದಿಕೆಯ
ಮೇಲೆ ನಿನ್ನ ದೇವರಿಗೆ ಸಮರ್ಪಿಸು. [18]ಉಳಿದ ಬೆಳ್ಳಿ
ಬಂಗಾರಗಳನ್ನು ನಿನಗೂ ನಿನ್ನೊಂದಿಗಿರುವ ಇತರ
ರಿಗೂ ಸರಿತೋರುವ ರೀತಿಯಲ್ಲಿ ವಿನಿಯೋಗಿಸಿರಿ.
ಅದು ದೇವರಿಗೆ ಮೆಚ್ಚಿಕೆಯಾಗುವಂತೆ ಉಪಯೋಗಿ
ಸಿರಿ. [19]ಅವೆಲ್ಲವುಗಳನ್ನು ಜೆರುಸಲೇಮಿನ ದೇವರ
ಬಳಿಗೆ ತೆಗೆದುಕೊಂಡು ಹೋಗಿ ಆತನನ್ನು ಆರಾಧಿ
ಸಲು ಅವುಗಳನ್ನು ಉಪಯೋಗಿಸಿರಿ. [20]ಜೆರುಸಲೇ
ಮಿನ ದೇವಾಲಯಕ್ಕೆ ಇನ್ನೂ ವಸ್ತುಗಳು ಬೇಕಾಗಿ
ದ್ದಲ್ಲಿ ರಾಜನ ಖಜಾನೆಯಿಂದ ಹಣ ತೆಗೆದುಕೊಂಡು
ಅವುಗಳನ್ನು ಖರೀದಿಮಾಡು.

[21]ಅರಸನಾದ ಅರ್ತಷಸ್ತನೆಂಬ ನಾನು ಈ ರಾಜಾ
ಜ್ಞೆಯನ್ನು ಹೊರಡಿಸುತ್ತಿದ್ದೇನೆ: ಯೂಫ್ರೇಟೀಸ್
ನದಿಯ ಪಶ್ಚಿಮ ಪ್ರಾಂತ್ಯದಲ್ಲಿ ರಾಜಧನವನ್ನು
ಇಟ್ಟುಕೊಂಡಿರುವ ಎಲ್ಲಾ ಸಂಸ್ಥಾನಾಧಿಕಾರಿಗಳಿಗೆ
ನನ್ನ ಆಜ್ಞೆ ಏನೆಂದರೆ, ಎಜ್ರನಿಗೆ ಬೇಕಾದುದನ್ನು
ಅವರು ಒದಗಿಸಬೇಕು. ಎಜ್ರನು ಪರಲೋಕದ
ದೇವರ ಯಾಜಕನೂ ಆತನ ಕಟ್ಟಳೆಗಳ ಬೋಧ
ಕನೂ ಆಗಿದ್ದಾನೆ. ನನ್ನ ಈ ಆಜ್ಞೆಗೆ ಸಂಪೂರ್ಣ
ವಾಗಿಯೂ ತ್ವರಿತವಾಗಿಯೂ ವಿಧೇಯರಾಗ
ಬೇಕು. [22]ಇವುಗಳನ್ನು ನೀವು ಎಜ್ರನಿಗೆ ಕೊಡ
ಬೇಕು: ಮೂರು ಸಾವಿರದ ನಾನೂರು ಕಿಲೋ
ಗ್ರಾಂ ಬೆಳ್ಳಿ, ಇಪ್ಪತ್ತೆರಡು ಸಾವಿರ ಕಿಲೋ ಗ್ರಾಂ
ಗೋಧಿ, ಎರಡು ಸಾವಿರದ ಇನ್ನೂರು ಲೀಟರ್
ದ್ರಾಕ್ಷಾರಸ, ಎರಡು ಸಾವಿರದ ಇನ್ನೂರು ಲೀಟರ್
ಆಲಿವ್ ಎಣ್ಣೆ ಮತ್ತು ಬೇಕಾಗುವಷ್ಟು ಉಪ್ಪು. [23]ಪರ
ಲೋಕದ ದೇವರು ಯಾವಯಾವ ವಸ್ತುಗಳಿಗಾಗಿ
ಎಜ್ರನಿಗೆ ಆಜ್ಞಾಪಿಸಿರುವನೊ ಅವುಗಳನ್ನೆಲ್ಲ ನೀವು
ಎಜ್ರನಿಗೆ ಸಂಪೂರ್ಣವಾಗಿಯೂ ಶೀಘ್ರವಾ
ಗಿಯೂ ಒದಗಿಸಬೇಕು. ಇವುಗಳನ್ನು ಪರಲೋಕದ
ದೇವರ ಆಲಯಕ್ಕಾಗಿ ಮಾಡಿರಿ. ನನ್ನ ರಾಜ್ಯದ
ಮೇಲಾಗಲಿ ನನ್ನ ಮಕ್ಕಳ ಮೇಲಾಗಲಿ ದೇವರು
ಸಿಟ್ಟುಗೊಳ್ಳುವುದು ನಮಗೆ ಇಷ್ಟವಿಲ್ಲ.
[24]ನಾನು ನಿಮಗೆ ತಿಳಿಯಪಡಿಸುವುದೇನಂದರೆ:
ಯಾಜಕರಿಂದ, ಲೇವಿಯರಿಂದ, ಗಾಯಕರಿಂದ,
ದ್ವಾರಪಾಲಕರಿಂದ ಮತ್ತು ದೇವಾಲಯದ ಸೇವಕ
ರಿಂದ ತೆರಿಗೆ ವಸೂಲಿ ಮಾಡುವುದು ನ್ಯಾಯಬಾಹಿರ
ವಾದದ್ದು. ಅವರು ಯಾವ ರೀತಿಯ ತೆರಿಗೆಯ
ನ್ನಾಗಲೀ ಸುಂಕವನ್ನಾಗಲೀ ಕಪ್ಪವನ್ನಾಗಲೀ ಅರಸ
ನಿಗೆ ಸಲ್ಲಿಸಬೇಕಿಲ್ಲ. [25]ಎಜ್ರನೇ, ನಿನ್ನ ದೇವರು ನಿನಗೆ
ಕೊಟ್ಟಿರುವ ಜ್ಞಾನಶಕ್ತಿಯನ್ನು ಉಪಯೋಗಿಸಿ
ನ್ಯಾಯಧೀಶರನ್ನೂ ನ್ಯಾಯಶಾಸ್ತ್ರಿಗಳನ್ನೂ ಆರಿಸಿ
ನೇಮಿಸಲು ನಿನಗೆ ಅಧಿಕಾರ ಕೊಟ್ಟಿದ್ದೇನೆ.
ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯಗಳಲ್ಲಿ
ವಾಸಮಾಡುವ ಜನರಿಗೆಲ್ಲಾ ಅವರು ನ್ಯಾಯ

ತೀರಿಸುವರು. ನಿನ್ನ ದೇವರ ಕಟ್ಟಳೆಗಳನ್ನು ಅರಿತವರಿಗೆಲ್ಲಾ ಅವರು ನ್ಯಾಯತೀರಿಸುವರು. ಯಾರಿಗಾದರೂ ದೇವರ ಕಟ್ಟಳೆ ಗೊತ್ತಿಲ್ಲದಿದ್ದಲ್ಲಿ ಆ ನ್ಯಾಯಶಾಸ್ತ್ರಿಗಳು ಅವರಿಗೆ ಕಲಿಸಬೇಕು. [26]ದೇವರ
ಕಟ್ಟಳೆಗಳಿಗಾಗಲೀ ಅರಸನ ಆಜ್ಞೆಗಳಿಗಾಗಲೀ ಅವಿಧೇಯನಾಗುವವನಿಗೆ ದಂಡನೆಯಾಗಬೇಕು. ಅವರವರ ಅಪರಾಧಗಳ ಪ್ರಕಾರ ಮರಣಶಿಕ್ಷೆಯಿಂದಾಗಲೀ ಗಡಿಪಾರಿನಿಂದಾಗಲೀ ಅವರ ಆಸ್ತಿಪಾಸ್ತಿಗಳ ಜಪ್ತಿಯಿಂದಾಗಲೀ ಸೆರೆಮನೆ ವಾಸದಿಂದಾಗಲೀ ಅವರಿಗೆ ದಂಡನೆಯಾಗಬೇಕು.

### ಎಜ್ರನು ದೇವರನ್ನು ಕೊಂಡಾಡಿದನು

27 ನಮ್ಮ ಪೂರ್ವಿಕರ ದೇವರಾದ ಯೆಹೋವನಿಗೆ ಸ್ತೋತ್ರವಾಗಲಿ! ಜೆರುಸಲೇಮಿನಲ್ಲಿರುವ ದೇವಾಲಯವನ್ನು ಗೌರವಿಸುವ ಮನಸ್ಸನ್ನು ರಾಜನ ಹೃದಯದಲ್ಲಿರಿಸಿದ್ದಕ್ಕೆ ಆತನಿಗೆ ಸ್ತೋತ್ರ!

28 ರಾಜನ, ಅವನ ಮುಖ್ಯಾಧಿಕಾರಿಗಳ ಮತ್ತು ಅವನ ಸಲಹೆಗಾರರ ಸಮ್ಮುಖದಲ್ಲಿ ಯೆಹೋವನು ನನ್ನ ಮೇಲಿಟ್ಟಿರುವ ಅಗಾಧ ಪ್ರೀತಿಯನ್ನು ಪ್ರಕಟಪಡಿಸಿದನು. ದೇವರಾದ ಯೆಹೋವನು ನನ್ನ ಸಂಗಡವಿದ್ದುದರಿಂದ ನಾನು ಧೈರ್ಯಗೊಂಡೆನು. ನನ್ನೊಂದಿಗೆ ಜೆರುಸಲೇಮಿಗೆ ಹೋಗಲು ಮನಸ್ಸುಳ್ಳ ಇಸ್ರೇಲ್ ನಾಯಕರನ್ನು ನಾನು ಒಟ್ಟುಗೂಡಿಸಿದೆನು.

### ಎಜ್ರನೊಂದಿಗೆ ಹಿಂದಿರುಗಿದ ನಾಯಕರು

8 ಬಾಬಿಲೋನಿನಿಂದ ಜೆರುಸಲೇಮಿಗೆ ನನ್ನೊಂದಿಗೆ (ಎಜ್ರ) ಹೊರಟ ಇಸ್ರೇಲರ ಕುಲಪ್ರಧಾನರ ಮತ್ತು ಇತರ ಜನರ ವಿವರಗಳು ಹೀಗಿದೆ. ಅರಸನಾದ ಅರ್ತಷಸ್ತನ ಆಳ್ವಿಕೆಯ ಕಾಲದಲ್ಲಿ ನಾವು ಜೆರುಸಲೇಮಿಗೆ ಬಂದು ಸೇರಿದೆವು. ಬಂದವರ ಹೆಸರುಗಳು ಹೀಗಿವೆ:
[2]ಫೀನೆಹಾಸನ ಸಂತತಿಯವರಲ್ಲಿ ಗೇರ್ಷೋಮ್; ಈತಾಮಾರನ ಸಂತತಿಯವರಲ್ಲಿ ದಾನಿಯೇಲನು; ದಾವೀದನ
ಸಂತತಿಯವರಲ್ಲಿ ಹಟ್ಟೂಷ್; [3]ಶೆಕನ್ಯನ ಸಂತತಿಯವ
ರಲ್ಲಿ ಪರೋಷ್, ಜೆಕರ್ಯ ಮತ್ತು ಬೇರೆ ನೂರೈವತ್ತು
ಮಂದಿ ಗಂಡಸರು; [4]ಪಹತ್ ಮೋವಾಬ್ ಸಂತತಿಯವ
ರಲ್ಲಿ ಜೆರಹ್ಯನ ಮಗನಾದ ಎಲ್ಯೆಹೋವೇನೈ ಮತ್ತು ಇತರ
ಇನ್ನೂರು ಮಂದಿ ಗಂಡಸರು; [5]ಜತ್ತೂವಿನ ಸಂತತಿಯ
ವರಲ್ಲಿ ಯಹಜೀಯೇಲನ ಮಗನಾದ ಶೆಕನ್ಯ ಮತ್ತು
ಇತರ ಮುನ್ನೂರು ಮಂದಿ ಗಂಡಸರು; [6]ಆದಿನನ
ಸಂತತಿಯವರಲ್ಲಿ ಯೋನಾತಾನನ ಮಗನಾದ ಎಬೆದ್
ಮತ್ತು ಇತರ ಐವತ್ತು ಮಂದಿ ಗಂಡಸರು; [7]ಏಲಾಮಿನ
ಸಂತತಿಯವರಲ್ಲಿ ಅತಲ್ಯನ ಮಗನಾದ ಯೆಶಾಯ ಮತ್ತು
ಬೇರೆ ಎಪ್ಪತ್ತು ಮಂದಿ ಗಂಡಸರು; [8]ಶೆಫಟ್ಯನ ಸಂತತಿ
ಯವರಲ್ಲಿ ಮೀಕಾಯೇಲನ ಮಗನಾದ ಜೆಬದ್ಯ ಮತ್ತು
ಬೇರೆ ಎಂಭತ್ತು ಮಂದಿ ಗಂಡಸರು; [9]ಯೋವಾಬನ
ಸಂತತಿಯವರಲ್ಲಿ ಯೆಹೀಯೇಲನ ಮಗನಾದ ಓಬದ್ಯ
ಮತ್ತು ಇನ್ನೂರ ಹದಿನೆಂಟು ಮಂದಿ ಬೇರೆ ಗಂಡಸರು;
[10]ಬಾನೀಯ ಸಂತತಿಯವರಲ್ಲಿ ಯೋಸಿಫ್ಯನ ಮಗನಾದ
ಶೆಲೋಮೀತ್ ಮತ್ತು ನೂರ ಅರವತ್ತು ಮಂದಿ ಇತರ
ಗಂಡಸರು; [11]ಬೇಬೈಯ ಸಂತತಿಯವರಿಂದ ಬೇಬೈಯ
ಮಗನಾದ ಜೆಕರ್ಯ ಮತ್ತು ಇಪ್ಪತ್ತೆಂಟು ಮಂದಿ
ಇತರರು; [12]ಅಜ್ಗಾದನ ಸಂತತಿಯವರಿಂದ ಹಕ್ಕಾಟಾನನ
ಮಗನಾದ ಯೋಹಾನಾನ್ ಮತ್ತು ಇತರ ನೂರಹತ್ತು
ಮಂದಿ ಗಂಡಸರು; [13]ಅದೋನೀಕಾಮಾನ ಕೊನೆಯ
ಸಂತತಿಯವರಿಂದ ಎಲೀಫೆಲೆಟ್, ಎಮೀಯೇಲ್,
ಶೆಮಾಯ ಮತ್ತು ಬೇರೆ ಅರವತ್ತು ಮಂದಿ ಗಂಡಸರು;
[14]ಬಿಗ್ವೈಯ ಸಂತತಿಯವರಲ್ಲಿ ಊತೈ, ಜಕ್ಕೂರ ಮತ್ತು
ಎಪ್ಪತ್ತು ಮಂದಿ ಇತರ ಗಂಡಸರು.

### ಮರಳಿ ಜೆರುಸಲೇಮಿಗೆ

[15]ಎಜ್ರನಾದ ನಾನು ಅಹವಾ ಕಡೆಗೆ ಹರಿಯುವ ನದಿಯ ಬಳಿಗೆ ಬರುವಂತೆ ಮೇಲಿನ ಎಲ್ಲಾ ಜನರಿಗೆ ಹೇಳಿದೆ. ಆ ಸ್ಥಳದಲ್ಲಿ ನಾವು ಮೂರು ದಿನ ಇದ್ದೆವು. ಆ ಗುಂಪಿನಲ್ಲಿ ಯಾಜಕರೂ ಇದ್ದರು ಎಂದು ನಮಗೆ ತಿಳಿದುಬಂತು. ಆದರೆ ಲೇವಿಯರು ಅವರಲ್ಲಿ ಇರಲಿಲ್ಲ.
[16]ಆಗ ನಾನು ಎಲಿಯೆಜರ್, ಅರೀಯೇಲ್, ಶೆಮಾಯ, ಎಲ್ನಾತಾನ್, ಯಾರೀಬ್, ಎಲ್ನಾತಾನ್, ನಾತಾನ್, ಜೆಕರ್ಯ ಮತ್ತು ಮೆಷುಲ್ಲಾಮ್ ಎಂಬ ನಾಯಕರನ್ನು ಕರೆದೆನು. ಅಲ್ಲದೆ (ಬೋಧಕರುಗಳಾದ) ಯಾಯಾರೀಬ್ ಮತ್ತು ಎಲ್ನಾತಾನ್ ಎಂಬವರನ್ನು ಕರೆದು
[17]ಕಾಸಿಫ್ಯದ ಇದ್ದೋ ಎಂಬವರಲ್ಲಿಗೆ ಕಳುಹಿಸಿದೆನು. ಇವನು ಕಾಸಿಫ್ಯದ ನಿವಾಸಿಗಳ ನಾಯಕನಾಗಿದ್ದನು. ಇವನ ಸಂಬಂಧಿಕರು ಕಾಸಿಫ್ಯದ ದೇವಾಲಯದ ಸೇವಕರಾಗಿದ್ದಾರೆ. ನಾವು ಕಟ್ಟುವ ದೇವಾಲಯದಲ್ಲಿ ಸೇವೆ ಮಾಡುವವರನ್ನು ಇದ್ದೋ ಕಳುಹಿಸಬೇಕೆಂಬ ಉದ್ದೇಶದಿಂದಲೇ ನಾನು ಅವರನ್ನು ಅವರ ಬಳಿಗೆ ಕಳುಹಿಸಿದೆನು. [18]ದೇವರು
ನಮ್ಮ ಸಂಗಡವಿದ್ದ ಕಾರಣ, ಇದ್ದೋವಿನ ಸಂಬಂಧಿಕರು ಇವರನ್ನು ಕಳುಹಿಸಿಕೊಟ್ಟರು;

ಮಹ್ಲೀಯ ಸಂತತಿಯವರಲ್ಲಿ ಜಾಣನಾದ ಶೇಲೇಬ್ಯ. ಮಹ್ಲೀಯು ಲೇವಿಯ ವಂಶದವನಾಗಿದ್ದನು. ಲೇವಿಯು ಇಸ್ರೇಲನ ಒಬ್ಬ ಮಗನಾಗಿದ್ದನು. ಅವರು ಸಹ ತಮ್ಮ ಗಂಡುಮಕ್ಕಳನ್ನು ಮತ್ತು

ಸಹೋದರರನ್ನು ಕಳುಹಿಸಿದರು. ಒಟ್ಟಿನಲ್ಲಿ ಆ
ಕುಟುಂಬದಿಂದ 18 ಮಂದಿ ಗಂಡಸರಿದ್ದರು.
19 ಅಲ್ಲದೆ ಮೆರಾರೀ ಸಂತತಿಯವರಾದ ಹಷಬ್ಯನ
ಮತ್ತು ಯೆಶಾಯ; ಇವರು ಸಹ ತಮ್ಮ ಸಹೋದ
ರರನ್ನು ಮತ್ತು ಸಂಬಂಧಿಕರನ್ನು ಕಳುಹಿಸಿದರು.
ಒಟ್ಟಿನಲ್ಲಿ ಆ ಕುಟುಂಬದಿಂದ ಇಪ್ಪತ್ತು ಮಂದಿ
ಗಂಡಸರಿದ್ದರು.
20 ಇನ್ನೂರಿಪ್ಪತ್ತು ಮಂದಿ ದೇವಾಲಯದ ಸೇವಕರು;
(ಇವರ ಪೂರ್ವಿಕರು ದಾವೀದನ ಕಾಲದಲ್ಲಿ
ಲೇವಿಯರಿಗೆ ಸಹಾಯಕರಾಗಿ ಆರಿಸಲ್ಪಟ್ಟವರಾಗಿ
ದ್ದರು. ಅವರೆಲ್ಲರ ಹೆಸರುಗಳನ್ನು ಪಟ್ಟಿಮಾಡ
ಲಾಗಿದೆ.)

21ಅಹವಾ ನದಿಯ ದಡದಲ್ಲಿದ್ದಾಗ ನಮಗೆ ಸುಖ
ಪ್ರಯಾಣ ದೊರೆಯುವಂತೆ ಎಲ್ಲಾ ತರದ ತೊಂದರೆಗ
ಳಿಂದ ಪಾರುಮಾಡುವಂತೆ ಮತ್ತು ನಮ್ಮಲ್ಲಿರುವ ಸ್ವತ್ತು
ಗಳನ್ನು ಕಾಪಾಡುವಂತೆ ನಮ್ಮ ದೇವರಲ್ಲಿ ದೀನತೆಯಿಂದ
ಉಪವಾಸ ಪ್ರಾರ್ಥನೆ ಮಾಡಬೇಕೆಂದು ನೆರೆದುಬಂದ
ಜನರಿಗೆ ಪ್ರಕಟಿಸಿದೆನು. 22ನಾವು ಪ್ರಯಾಣ ಮಾಡುವಾಗ
ದಾರಿಯಲ್ಲಿ ಶತ್ರುಗಳಿದ್ದುದರಿಂದ ನಮ್ಮ ಸಂರಕ್ಷಣೆಗಾಗಿ
ಸಿಪಾಯಿಗಳನ್ನು ಮತ್ತು ರಾಹುತರನ್ನು ಅರಸನಿಂದ
ಕೇಳಲು ನನಗೆ ಸಂಕೋಚವಾಯಿತು. ಯಾಕೆಂದರೆ,
''ನಮ್ಮ ದೇವರು ತನ್ನನ್ನು ನಂಬಿದವರೊಂದಿಗಿದ್ದಾನೆ; ಆತ
ನಿಂದ ದೂರಹೋಗುವವರ ಮೇಲೆ ಆತನು ಕೋಪವುಳ್ಳ
ವನಾಗಿದ್ದಾನೆ'' ಎಂದು ರಾಜನಾದ ಅರ್ತಷಸ್ತನಿಗೆ ನಾವು
ಹೇಳಿದ್ದೆವು. 23ಹಾಗೆ ನಾವು ನಮ್ಮ ಪ್ರಯಾಣದ ಕುರಿತು
ದೇವರಿಗೆ ಉಪವಾಸ ಪ್ರಾರ್ಥನೆ ಮಾಡಿದೆವು. ಆತನು
ಅದನ್ನು ಅನುಗ್ರಹಿಸಿದನು.
24ಆಮೇಲೆ ನಾನು ಯಾಜಕರಲ್ಲಿ ಹನ್ನೆರಡು ಮಂದಿ
ಯನ್ನು ಆರಿಸಿಕೊಂಡೆನು. ಅವರು ಶೇರೇಬ್ಯ, ಹಷಬ್ಯ
ಮತ್ತು ಅವರ ಹತ್ತು ಮಂದಿ ಸಹೋದರರು. 25ದೇವಾಲ
ಯಕ್ಕೆ ಕೊಟ್ಟಿರುವ ಬೆಳ್ಳಿಬಂಗಾರಗಳನ್ನು ಮತ್ತು ಇತರ
ವಸ್ತುಗಳನ್ನು ನಾನು ತೂಗಿ ಆರಿಸಲ್ಪಟ್ಟಿದ್ದ ಹನ್ನೆರಡು
ಮಂದಿಗೆ ಕೊಟ್ಟೆನು. ಅವುಗಳನ್ನು ಅರ್ತಷಸ್ತ ರಾಜನೂ
ಅವನ ಸಲಹೆಗಾರರು ಉನ್ನತಾಧಿಕಾರಿಗಳೂ ಅಲ್ಲದೆ
ಬಾಬಿಲೋನಿನಲ್ಲಿದ್ದ ಎಲ್ಲಾ ಇಸ್ರೇಲರು ದೇವಾಲ
ಯಕ್ಕಾಗಿ ಕೊಟ್ಟಿದ್ದರು. 26ನಾನು ಅವುಗಳನ್ನು ತೂಗಿದಾಗ
ಇಪ್ಪತ್ತೆರಡು ಸಾವಿರದ ನೂರು ಕಿಲೋ ಗ್ರಾಂ ಬೆಳ್ಳಿಯೂ
ಮೂರು ಸಾವಿರದ ನಾನೂರು ಕಿಲೋ ಗ್ರಾಂ ತೂಕದ
ಬೆಳ್ಳಿಪಾತ್ರೆಗಳೂ, ಮೂರು ಸಾವಿರದ ನಾನೂರು ಕಿಲೋ
ಗ್ರಾಂ ತೂಕದ ಬಂಗಾರವೂ ಇದ್ದವು. 27ನಾನು ಇಪ್ಪತ್ತು
ಬಂಗಾರದ ಬೋಗುಣಿಗಳನ್ನು ಕೊಟ್ಟಿದ್ದೆನು. ಅವುಗಳ
ಒಟ್ಟು ತೂಕ ಎಂಟುವರೆ ಕಿಲೋ ಗ್ರಾಂ. ಆಮೇಲೆ ಎರಡು
ಶ್ರೇಷ್ಠವಾದ ಶುದ್ಧ ತಾಮ್ರದ ಎರಡು ಪಾತ್ರೆಗಳನ್ನೂ
ಕೊಟ್ಟನು. ಇವು ಬಂಗಾರದಷ್ಟೇ ಬೆಲೆ ಬಾಳುವಂತಹ
ದ್ದಾಗಿದ್ದವು. 28ಆ ಹನ್ನೆರಡು ಮಂದಿ ಯಾಜಕರಿಗೆ ನಾನು
ಹೇಳಿದ್ದೇನೆಂದರೆ, ''ನೀವು ಮತ್ತು ಈ ವಸ್ತುಗಳು
ಯೆಹೋವನಿಗೆ ಪರಿಶುದ್ಧವಾದವುಗಳಾಗಿವೆ. ನಮ್ಮ
ಪೂರ್ವಿಕರ ದೇವರಾದ ಯೆಹೋವನಿಗೆ ಜನರು ಕಾಣಿಕೆ
ಕೊಟ್ಟರು.
29ಆದುದರಿಂದ ಭದ್ರವಾಗಿ ಇಟ್ಟುಕೊಳ್ಳಿರಿ.
ಜೆರುಸಲೇಮಿನಲ್ಲಿರುವ ದೇವಾಲಯದ ಅಧಿಕಾರಿ ಗಳಿಗೆ,
ಲೇವಿಯರಿಗೆ ಮತ್ತು ಇಸ್ರೇಲ್ ಕುಲಪ್ರಧಾನರಿಗೆ
ಇವುಗಳನ್ನು ತಲುಪಿಸುವ ತನಕ ನೀವು ಇದಕ್ಕೆ ಜವಾಬ್ದಾರ
ರಾಗಿದ್ದೀರಿ. ಅವರು ಇವುಗಳನ್ನು ತೂಗಿ ದೇವಾಲಯದ
ಕೋಣೆಯಲ್ಲಿ ಭದ್ರವಾಗಿಡುವರು.
30ಎಜ್ರನು ತೂಕಮಾಡಿ ಕೊಟ್ಟ ಬೆಳ್ಳಿಬಂಗಾರಗಳನ್ನು
ಮತ್ತು ಇತರ ವಿಶೇಷ ವಸ್ತುಗಳನ್ನು ಯಾಜಕರು ಮತ್ತು
ಲೇವಿಯರು ಸ್ವೀಕರಿಸಿ ಜೆರುಸಲೇಮಿನಲ್ಲಿರುವ ದೇವಾಲ
ಯಕ್ಕೆ ತಲುಪಿಸುವ ಜವಾಬ್ದಾರಿಕೆ ಹೊತ್ತರು.
31ಮೊದಲನೆಯ ತಿಂಗಳಿದ ಹನ್ನೆರಡನೆಯ ದಿನ ನಾವು
ಅಹವಾ ನದಿಯ ದಡವನ್ನು ಬಿಟ್ಟು ಜೆರುಸಲೇಮಿಗೆ
ಹೊರಟೆವು. ದೇವರು ನಮ್ಮೊಂದಿಗಿದ್ದು ಶತ್ರುಗ
ಳಿಂದಲೂ ಕಳ್ಳರಿಂದಲೂ ನಮ್ಮನ್ನು ಸಂರಕ್ಷಿಸಿ ಕಾಪಾಡಿ
ದನು.
32ಜೆರುಸಲೇಮಿಗೆ ಬಂದು ಮೂರು ದಿನ ವಿಶ್ರಾಂತಿ
ತೆಗೆದುಕೊಂಡೆವು. 33ನಾಲ್ಕನೆಯ ದಿನ ನಾವು ದೇವಾಲ
ಯಕ್ಕೆ ಹೋಗಿ ಅಲ್ಲಿ ಬೆಳ್ಳಿ, ಚಿನ್ನ ಮತ್ತು ಇತರ ಶ್ರೇಷ್ಠ
ವಸ್ತುಗಳನ್ನು ತೂಗಿ ಯಾಜಕನಾದ ಊರೀಯನ ಮಗ
ನಾದ ಮೆರೇಮೋತನಿಗೆ ಒಪ್ಪಿಸಿದೆವು. ಫೀನೆಹಾಸನ ಮಗ
ನಾದ ಎಲ್ಲಾಜಾರನು ಮೆರೇಮೋತನ ಸಂಗಡವಿದ್ದನು.
ಲೇವಿಯರಾದ ಯೇಷೂವನ ಮಗನಾದ ಯೋಜಾಚಾ
ದನು ಮತ್ತು ಬಿನ್ನೂಯಿಯ ಮಗನಾದ ನೋವದ್ಯನು
ಅವರ ಸಂಗಡ ಇದ್ದರು. 34ನಾವು ಎಲ್ಲಾ ವಸುಗಳನ್ನು
ತೂಗಿ ಪಟ್ಟಿಯಲ್ಲಿ ಬರೆದಿಟ್ಟೆವು.
35ಆಮೇಲೆ ಸೆರೆಯಿಂದ ಹಿಂತಿರುಗಿಬಂದ ಯೆಹೂ
ದ್ಯರು ಇಸ್ರೇಲ ದೇವರಿಗೆ ಇಸ್ರೇಲರ ಎಲ್ಲಾ ಕುಲಗಳ
ವರಿಗಾಗಿ ಹನ್ನೆರಡು ಹೋರಿಗಳನ್ನು, ತೊಂಭತ್ತಾರು
ಟಗರುಗಳನ್ನು, ಎಪ್ಪತ್ತೇಳು ಗಂಡು ಕುರಿಗಳನ್ನು ಮತ್ತು
ಹನ್ನೆರಡು ಗಂಡು ಆಡುಗಳನ್ನು ಸರ್ವಾಂಗಹೋಮ
ಯಜ್ಞವನ್ನಾಗಿಯೂ ಮತ್ತು ಪಾಪಪರಿಹಾರಕ ಯಜ್ಞವ
ನ್ನಾಗಿಯೂ ಸಮರ್ಪಿಸಿದರು.
36ಅರಸನಾದ ಅರ್ತಷಸ್ತನು ಕೊಟ್ಟಿದ್ದ ರಾಜಾಜ್ಞೆಯ
ಪತ್ರವನ್ನು ಯೂಫ್ರೇಟೀಸ್ ನದಿಯ ಪಶ್ಚಿಮ ಪ್ರಾಂತ್ಯದ

ರಾಜ್ಯಪಾಲರಿಗೂ ಸಂಸ್ಥಾನಾಧಿಕಾರಿಗಳಿಗೂ ಕೊಟ್ಟಾಗ ಅವರು ಇಸ್ರೇಲ್ ಜನರಿಗೂ ಅವರ ದೇವಾಲಯಕ್ಕೂ ಸಂಪೂರ್ಣ ಸಹಕಾರವನ್ನೂ ಬೆಂಬಲವನ್ನೂ ಕೊಟ್ಟರು.

### ಯೆಹೂದ್ಯರಲ್ಲದ ಅನ್ಯರೊಂದಿಗೆ ಮದುವೆ

9 ಇವೆಲ್ಲಾ ಆದ ಬಳಿಕ ಇಸ್ರೇಲರ ಪ್ರಧಾನರು ನನ್ನ ಬಳಿಗೆ ಬಂದು, ''ಎಜ್ರನೇ, ಇಸ್ರೇಲ್ ಜನರು ಸುತ್ತಲೂ ವಾಸಿಸುವ ಅನ್ಯಜನರಿಂದ ತಮ್ಮನ್ನು ಪ್ರತ್ಯೇಕಿಸಿಕೊಳ್ಳಲಿಲ್ಲ. ಯಾಜಕರಾಗಲೀ ಲೇವಿಯರಾಗಲೀ ತಮ್ಮನ್ನು ಪ್ರತ್ಯೇಕಿಸಿಕೊಳ್ಳಲಿಲ್ಲ. ದೇಶದಲ್ಲಿ ವಾಸವಾಗಿರುವ ಕಾನಾನ್ಯರ, ಹಿತ್ತಿಯರ, ಪೆರಿಜ್ಜೀಯರ, ಯೆಬೂಸಿಯರ, ಅಮ್ಮೋನಿಯರ, ಮೋವಾಬ್ಯರ, ಅಮೋರಿಯರ, ಈಜಿಪ್ಟಿನವರ ಕೆಟ್ಟ ಜೀವಿತವು ಇಸ್ರೇಲರ ಮೇಲೆ ಪ್ರಭಾವ ಬೀರಿದೆ.
2ಇಸ್ರೇಲ್ ಜನರು ತಮ್ಮ ಸುತ್ತಲು ವಾಸಿಸುವ ಜನರೊಂದಿಗೆ ಮದುವೆಯಾಗಿದ್ದಾರೆ. ಇಸ್ರೇಲ್ ಜನರು ದೇವರ ವಿಶೇಷ ಜನರಾಗಿದ್ದಾರೆ. ಆದರೆ ಈಗ ಅನ್ಯರೊಂದಿಗೆ ಬೆರೆತು ಹೋಗಿದ್ದಾರೆ. ಇಸ್ರೇಲರ ಪ್ರಧಾನರು, ಮುಖ್ಯಾಧಿಕಾರಿಗಳು ಈ ರೀತಿಯಾಗಿ ಮಾಡಿ ಜನರಿಗೆ ಕೆಟ್ಟ ಮಾದರಿಯಾಗಿ ಜೀವಿಸುತ್ತಿದ್ದಾರೆ.''
3ಇದನ್ನು ಕೇಳಿದೊಡನೆ ನನ್ನ ಮನಸ್ಸಿನ ದುಃಖವನ್ನು ತೋರಿಸುವಂತೆ ನನ್ನ ಬಟ್ಟೆಯನ್ನು ಹರಿದು ಹಾಕಿದೆನು. ನನ್ನ ತಲೆಯ ಮತ್ತು ಗಡ್ಡದ ಕೂದಲನ್ನು ಕೆದರಿಕೊಂಡು ದಿಗ್ಭ್ರಮೆಗೊಂಡವನಾಗಿಯೂ ಬೇಸರಗೊಂಡವನಾಗಿಯೂ ಕುಳಿತುಕೊಂಡೆನು.

4ಇದನ್ನು ನೋಡಿ ದೇವರ ಕಟ್ಟಳೆಗಳನ್ನು ಗೌರವಿಸುವ ಪ್ರತಿಯೊಬ್ಬನು ಭಯಪಟ್ಟನು; ನಡುಗಿದನು. ಯಾಕೆಂದರೆ ಸೆರೆವಾಸದಿಂದ ಹಿಂದಿರುಗಿ ಬಂದ ಇಸ್ರೇಲರು ದೇವರಿಗೆ ನಂಬಿಗಸ್ತರಾಗಿರಲಿಲ್ಲ. ನಾನೂ ನನ್ನೊಂದಿಗಿದ್ದ ಜನರೂ ಸಾಯಂಕಾಲದ ಯಜ್ಞವನ್ನರ್ಪಿಸುವ ಸಮಯದ ತನಕ ಹಾಗೆಯೇ ಕುಳಿತಿದ್ದೆವು.

5ಸಾಯಂಕಾಲದ ನೈವೇದ್ಯ ಸಮರ್ಪಣೆಯ ಸಮಯದಲ್ಲಿ ನಾನು ಕುಳಿತಲ್ಲಿಂದ ಎದ್ದೆನು. ನನ್ನ ಬಟ್ಟೆಗಳು ಹರಿದಿದ್ದವು. ನಾನು ಮೊಣಕಾಲೂರಿ ಕೈಗಳನ್ನು ದೇವರಾದ ಯೆಹೋವನ ಕಡೆಗೆ
6ಚಾಚಿ ಹೀಗೆ ಪ್ರಾರ್ಥಿಸಿದೆನು: ''ನನ್ನ ದೇವರೇ, ನಿನ್ನ ಕಡೆಗೆ ಮುಖವೆತ್ತಲು ನನಗೆ ನಾಚಿಕೆಯಾಗುತ್ತದೆ; ಯಾಕಂದರೆ ನಮ್ಮ ಪಾಪಗಳು ನಮ್ಮ ತಲೆ ಮೀರಿ ಬೆಳೆದಿದೆ. ನಮ್ಮ ಅಪರಾಧಗಳ ರಾಶಿಯು ಪರಲೋಕದವರೆಗೂ ಏರಿಹೋಗಿದೆ.
7ನಮ್ಮ ಪೂರ್ವಿಕರ ಕಾಲದಿಂದ ಈ ತನಕ ನಾವು ಮಹಾಪರಾಧಗಳನ್ನು ಮಾಡಿದ್ದೇವೆ. ನಮ್ಮ ಪಾಪಗಳಿಗಾಗಿ ನಮಗೂ ನಮ್ಮ ರಾಜರುಗಳಿಗೂ ನಮ್ಮ ಯಾಜಕರುಗಳಿಗೂ ಶಿಕ್ಷೆಯಾಯಿತು. ಅನ್ಯದೇಶದ ರಾಜರುಗಳು ನಮ್ಮ ದೇಶವನ್ನು ಆಕ್ರಮಿಸಿ ನಮ್ಮ ಜನರನ್ನು ಸೆರೆಯಾಳುಗಳಾಗಿ ಒಯ್ದರು; ನಮ್ಮ ಐಶ್ವರ್ಯವನ್ನು ಸೂರೆಗೈದು ನಮ್ಮನ್ನು ನಾಚಿಕೆಗೆ ಒಳಪಡಿಸಿದರು. ಈಗಲೂ ಅದೇ ಅನುಭವ ನಮಗಾಗಿದೆ!

8ಈಗಲಾದರೋ ನೀನು ನಮ್ಮ ಮೇಲೆ ದಯೆ ತೋರಿಸಿರುವೆ. ಸೆರೆಯಲ್ಲಿದ್ದ ನಿನ್ನ ಜನರಲ್ಲಿ ಕೆಲವರು ಅಲ್ಲಿಂದ ತಪ್ಪಿಸಿಕೊಂಡು ನಿನ್ನ ಪರಿಶುದ್ಧ ದೇಶದಲ್ಲಿ ವಾಸಿಸುವಂತೆ ಮಾಡಿರುವೆ; ಗುಲಾಮತನದಿಂದ ನಮ್ಮನ್ನು ಬಿಡುಗಡೆ ಮಾಡಿ ಹೊಸ ಜೀವ ಕೊಟ್ಟಿರುವೆ.
9ಹೌದು, ನಾವು ಗುಲಾಮರಾಗಿದ್ದೆವು. ಆದರೆ ಸದಾಕಾಲ ಗುಲಾಮರಾಗಲು ನೀನು ನಮ್ಮನ್ನು ಬಿಡಲಿಲ್ಲ. ನಮ್ಮ ಮೇಲೆ ನೀನು ದಯೆ ತೋರಿಸಿರುವೆ. ಪರ್ಶಿಯ ರಾಜರು ನಮಗೆ ಕರುಣೆತೋರುವಂತೆ ಮಾಡಿದೆ. ನಿನ್ನ ಆಲಯವು ಹಾಳಾಗಿತ್ತು. ನಿನ್ನ ಆ ಆಲಯವನ್ನು ಮತ್ತೆ ಹೊಸದಾಗಿ ಕಟ್ಟಲು ನೀನು ನಮಗೆ ಹೊಸ ಜೀವವನ್ನು ಕೊಟ್ಟಿರುವೆ. ದೇವರೇ, ಯೆಹೂದ ಮತ್ತು ಜೆರುಸಲೇಮ್‌ಗಳ ಸಂರಕ್ಷಣೆಗಾಗಿ ಗೋಡೆಯನ್ನು ಕಟ್ಟಲು ನೀನು ನಮಗೆ ಸಹಾಯಮಾಡಿದೆ.

10ದೇವರೇ, ಈಗ ನಾವು ನಿನಗೆ ಏನು ಹೇಳೋಣ? ನಾವು ನಿನಗೆ ವಿಧೇಯರಾಗುವುದನ್ನು ನಿಲ್ಲಿಸಿದ್ದೇವೆ.
11ದೇವರೇ, ನೀನು ನಿನ್ನ ಸೇವಕರಾದ ಪ್ರವಾದಿಗಳ ಮೂಲಕ ನಮಗೆ ಆ ಆಜ್ಞೆಗಳನ್ನು ಕೊಟ್ಟಿರುವೆ. ನೀನು ಹೀಗೆ ಹೇಳಿದೆ: 'ನೀವು ವಾಸಿಸಲಿರುವ ಮತ್ತು ನಿಮ್ಮದನ್ನಾಗಿಸಿಕೊಳ್ಳುವ ನಾಡು ಪಾಳಾಗಿರುವ ನಾಡಾಗಿದೆ. ಅಲ್ಲಿಯ ಜನರು ಎಲ್ಲೆಲ್ಲಿಯೂ ಮಾಡಿರುವ ಕೆಟ್ಟಕೃತ್ಯಗಳಿಂದ ಅದು ಹಾಳಾಗಿದೆ; ಅವರು ತಮ್ಮ ಪಾಪಗಳಿಂದ ಆ ನಾಡನ್ನು ಹೊಲಸು ಮಾಡಿದ್ದಾರೆ.
12ಆದುದರಿಂದ ಇಸ್ರೇಲ್ ಜನರೇ, ನಿಮ್ಮ ಮಕ್ಕಳು ಅವರ ಮಕ್ಕಳನ್ನು ಮದುವೆಯಾಗಲು ಬಿಡಬೇಡಿ. ಅವರ ಸಹವಾಸ ಮಾಡಬೇಡಿರಿ. ಅವರ ವಸ್ತುಗಳನ್ನು ಆಶಿಸಬೇಡಿರಿ. ನನ್ನ ಕಟ್ಟಳೆಗಳನ್ನು ಪಾಲಿಸಿರಿ; ಆಗ ನೀವು ಬಲಶಾಲಿಗಳಾಗಿ ಈ ದೇಶವನ್ನು ಅನುಭವಿಸುವಿರಿ. ಈ ದೇಶವನ್ನು ನೀವು ಇಟ್ಟುಕೊಂಡವರಾಗಿ ನಿಮ್ಮ ಮಕ್ಕಳಿಗೆ ಸ್ವಾಸ್ತ್ಯವಾಗಿ ಕೊಡುವಿರಿ.'

13ನಮಗೆ ಒದಗಿದ ಕೇಡುಕು, ಸಂಕಟಗಳಿಗೆ ನಾವೇ ಕಾರಣರು. ನಾವು ಅನೀತಿ ಕೆಲಸಗಳನ್ನು ಮಾಡಿದ್ದೆವು. ಅದಕ್ಕೆ ಅನುಭವಿಸಬೇಕಾಗಿದ್ದ ಶಿಕ್ಷೆಯನ್ನು ನೀನು ನಮಗೆ ವಿಧಿಸಲಿಲ್ಲ. ನಾವು ಅತಿಘೋರವಾದ ಪಾಪಗಳನ್ನು ಮಾಡಿದ್ದಕ್ಕೆ ಅತ್ಯಂತ ಘೋರ ಶಿಕ್ಷೆಯು ನಮಗೆ ದೊರಕಬೇಕಿತ್ತು. ಆದರೂ ನೀನು ನಮ್ಮವರಲ್ಲಿ ಕೆಲವರನ್ನು ಸೆರೆಯಿಂದ ತಪ್ಪಿಸಿಕೊಳ್ಳುವಂತೆ ಮಾಡಿದೆ.

14ನಿನ್ನ ಆಜ್ಞೆಗಳಿಗೆ ಅವಿಧೇಯರಾಗಬಾರದೆಂದು ಈಗ ನಮಗೆ ತಿಳಿಯುತ್ತದೆ. ಅನ್ಯಜನರನ್ನು ಮದುವೆ ಮಾಡಿ

ಕೊಳ್ಳಬಾರದು. ಅವರು ಘೋರ ಪಾಪಿಗಳು. ನಾವು
ಹೀಗೆಯೇ ಅವರೊಂದಿಗೆ ಮದುವೆಯಾದರೆ ನೀನು
ನಮ್ಮನ್ನು ನಾಶಮಾಡುವೆ ಎಂದು ನಾವು ತಿಳಿದಿದ್ದೇವೆ.
ಹೀಗಿರುವಲ್ಲಿ ಇಸ್ರೇಲ್ ಜನಾಂಗದಲ್ಲಿ ಯಾರೂ
ಉಳಿಯಲಾರರು.
15ಇಸ್ರೇಲಿನ ದೇವರಾದ ಯೆಹೋವನೇ, ನೀನು
ಒಳ್ಳೆಯವನಾಗಿರುವೆ. ನಮ್ಮ ಜನಾಂಗದ ಕೆಲವರ
ನ್ನಾದರೂ ಉಳಿದುಕೊಳ್ಳುವಂತೆ ಮಾಡಿರುವೆ. ಹೌದು,
ನಾವು ಪಾಪಿಗಳು. ನಮ್ಮ ಅಪರಾಧಗಳ ದೆಸೆಯಿಂದ
ಯಾರೂ ನಿನ್ನ ಮುಂದೆ ನಿಲ್ಲಲು ಸಾಧ್ಯವಿಲ್ಲ.''

### ಜನರು ಪಾಪವನ್ನು ಅರಿಕೆ ಮಾಡಿದ್ದು

10 ದೇವಾಲಯದೆದುರು ಎಜ್ರನು ರೋಧಿಸುತ್ತಾ,
ದೇವರಿಗೆ ಅಡ್ಡಬಿದ್ದು ಪ್ರಾರ್ಥಿಸುತ್ತಾ ಪಾಪ
ದರಿಕೆ ಮಾಡುತ್ತಾ ಇರುವಾಗ ಅವನ ಸುತ್ತಲೂ ಅನೇಕ
ಮಂದಿ ಇಸ್ರೇಲರ ಗಂಡಸರು, ಹೆಂಗಸರು, ಮಕ್ಕಳು ಸೇರಿ
ಬಂದರು. ಅವರೂ ಗಟ್ಟಿಯಾಗಿ ಅಳಲು ಪ್ರಾರಂಭಿಸಿ
ದರು. 2ಆಗ ಏಲಾಮನ ಸಂತತಿಯವನಾದ ಯೆಹೀಯೇ
ಲನ ಮಗನಾದ ಶೆಕನ್ಯನು ಎಜ್ರನಿಗೆ ಹೀಗಂದನು: ''ನಾವು
ದೇವರಿಗೆ ನಂಬಿಗಸ್ತರಾಗಿರಲಿಲ್ಲ. ನಾವು ಅನ್ಯಜನ
ರೊಂದಿಗೆ ಮದುವೆಯಾಗಿದ್ದೇವೆ. ಹಾಗಿದ್ದರೂ ಇಸ್ರೇಲ
ರಿಗೆ ಒಂದು ನಿರೀಕ್ಷೆ ಇದೆ. 3ಈಗ ನಾವು ದೇವರ ಮುಂದೆ
ಅನ್ಯರಾದ ಹೆಂಡತಿಯರನ್ನೂ ಅವರ ಮಕ್ಕಳನ್ನೂ
ತೊರೆದುಬಿಡುತ್ತೇವೆಂದು ಒಡಂಬಡಿಕೆ ಮಾಡೋಣ.
ಹೀಗೆ ಮಾಡುವುದರಿಂದ ಎಜ್ರನ ಮತ್ತು ದೇವರ ಕಟ್ಟಳೆ
ಗಳನ್ನು ಗೌರವಿಸುವವರ ಸಲಹೆಯನ್ನು ನಾವು ಅನುಸರಿ
ಸುವವರಾಗಿರುತ್ತೇವೆ; ನಾವು ದೇವರ ಕಟ್ಟಳೆಗೆ ವಿಧೇಯ
ರಾಗುತ್ತೇವೆ. 4ಎಜ್ರನೇ, ಎದ್ದೇಳು, ಇದು ನಿನ್ನ ಜವಾ
ಬ್ದಾರಿಕೆ. ನಾವು ನಿನ್ನನ್ನು ಬೆಂಬಲಿಸುತ್ತೇವೆ. ಧೈರ್ಯದಿಂದ
ಈ ಕೆಲಸವನ್ನು ಪ್ರಾರಂಭಿಸು.''
5ಎಜ್ರನು ಎದ್ದುನಿಂತು ಮಹಾಯಾಜಕರೂ,
ಲೇವಿಯರೂ ಮತ್ತು ಇಸ್ರೇಲಿನ ಜನರೂ ಅವನು ಹೇಳಿದ
ಪ್ರಕಾರ ಮಾಡುತ್ತೇವೆ ಎಂಬ ಪ್ರತಿಜ್ಞೆಯನ್ನು ಅವರಿಂದ
ತೆಗೆದುಕೊಂಡನು.
6ಎಜ್ರನು ಅಲ್ಲಿಂದೆದ್ದು ಎಲ್ಯಾಷೀಬನ ಮಗನಾದ
ಯೆಹೋಹಾನನ ಕೋಣೆಗೆ ಹೋಗಿ ಅಲ್ಲಿ ಅನ್ನ ನೀರಿ
ಲ್ಲದೆ ದುಃಖತಪ್ತನಾಗಿದ್ದನು. ಸೆರೆಯಿಂದ ಜೆರುಸಲೇಮಿಗೆ
ಬಂದಿದ್ದ ಯೆಹೂದ್ಯರ ದ್ರೋಹದ* ಬಗ್ಗೆ ಅವನು
ತುಂಬಾ ದುಃಖಿತನಾಗಿದ್ದನು. 7ಆಮೇಲೆ ಅವನು
ಯೆಹೂದಪ್ರಾಂತ್ಯ ಮತ್ತು ಜೆರುಸಲೇಮಿನಲ್ಲಿರುವ ಎಲ್ಲಾ
ಯೆಹೂದ್ಯರಿಗೆ ಸಂದೇಶ ಕಳುಹಿಸಿದನು. ಅದರಲ್ಲಿ, ಸೆರೆ
ಯಿಂದ ಹಿಂದೆ ಬಂದಿದ್ದ ಯೆಹೂದ್ಯರೆಲ್ಲರೂ ಜೆರುಸ
ಲೇಮಿನಲ್ಲಿ ಬಂದು ಸೇರಬೇಕು. 8ಮೂರು ದಿನಗ
ಳೊಳಗೆ ಯಾರಾದರೂ ಬಾರದೆ ಹೋದಲ್ಲಿ ಅವರು ತಮ್ಮ
ಆಸ್ತಿಯನ್ನು ಕಳೆದುಕೊಳ್ಳುವರು. ಈ ತೀರ್ಮಾನವನ್ನು
ಪ್ರಮುಖರೂ ಅಧಿಕಾರಿಗಳೂ ಮಾಡಿದ್ದಾರೆ; ಆ
ಮನುಷ್ಯನು ತಾನು ವಾಸಮಾಡುವ ಜನರ ಅನ್ಯೋನ್ಯತೆ
ಯಿಂದ ತೆಗೆಯಲ್ಪಡುವನು.''
9ಮೂರು ದಿನಗಳೊಳಗೆ ಯೆಹೂದ ಮತ್ತು
ಬೆನ್ಯಾಮೀನ್ ಕುಲಗಳವರಿಂದ ಎಲ್ಲಾ ಗಂಡಸರು ಒಂಭ
ತ್ತನೆಯ ತಿಂಗಳಿನ ಇಪ್ಪತ್ತನೆಯ ದಿವಸದಲ್ಲಿ ಜೆರುಸ
ಲೇಮಿನ ದೇವಾಲಯದ ಅಂಗಳಕ್ಕೆ ಬಂದು ಸೇರಿದರು.
ನಡೆಯಲಿಕ್ಕಿರುವ ಕೂಟದ ಉದ್ದೇಶದಿಂದಲೂ ಆ ದಿವಸ
ಬಂದಿದ್ದ ಮಳೆಯ ದೆಸೆಯಿಂದಲೂ ನೆರೆದಿದ್ದ ಜನರು
ನಡುಗುತ್ತಿದ್ದರು. 10ಆಗ ಎಜ್ರನು ಎದ್ದು ನಿಂತು ಜನ
ರನ್ನುದ್ದೇಶಿಸಿ ಹೇಳಿದ್ದೇನಂದರೆ: ''ನೀವು ದೇವರಿಗೆ
ವಿಧೇಯರಾಗಿರಲಿಲ್ಲ. ಅನ್ಯಮತದ ಹೆಂಗಸರನ್ನು ನೀವು
ಮದುವೆಯಾಗಿರುತ್ತೀರಿ. ಹೀಗೆ ಇಸ್ರೇಲಿನ ಪಾಪವು
ಹೆಚ್ಚುವಂತೆ ನೀವು ಮಾಡಿದಿರಿ. 11ಈಗ ನೀವು ಯೆಹೋವ
ನಿಗೆ ವಿರೋಧವಾಗಿ ಪಾಪ ಮಾಡಿರುವುದಾಗಿ ಅರಿಕೆ
ಮಾಡಬೇಕು. ಆತನೇ ನಮ್ಮ ಪೂರ್ವಿಕರ ದೇವರಾದ
ಯೆಹೋವನು. ಆತನ ಆಜ್ಞೆಗಳಿಗೆ ನೀವು ವಿಧೇಯರಾಗ
ಬೇಕು. ನಿಮ್ಮ ಅನ್ಯಜಾತಿಯ ಹೆಂಡತಿಯರಿಂದಲೂ ನಿಮ್ಮ
ಸುತ್ತಲು ವಾಸಿಸುವ ಅನ್ಯಜನಾಂಗದವರಿಂದಲೂ
ನಿಮ್ಮನ್ನು ಪ್ರತ್ಯೇಕಿಸಿಕೊಳ್ಳಿರಿ.''
12ಆಗ ಅಲ್ಲಿ ನೆರೆದುಬಂದವರೆಲ್ಲರೂ ಗಟ್ಟಿಯಾಗಿ
ಎಜ್ರನಿಗೆ ಉತ್ತರಿಸುತ್ತಾ, ''ಎಜ್ರನೇ, ನೀನು ಸರಿಯಾಗಿ
ಹೇಳಿರುವೆ! ನೀನು ಹೇಳಿದಂತೆಯೇ ನಾವು ಮಾಡಬೇಕು.
13ಆದರೆ ಇಲ್ಲಿ ಹೆಚ್ಚು ಜನರು ಸೇರಿ ಬಂದಿದ್ದಾರೆ. ಮಳೆ
ಸುರಿಯುತ್ತಲಿದೆ. ನಾವು ಹೆಚ್ಚು ಸಮಯ ಮಳೆಯಲ್ಲಿ
ರಲು ಸಾಧ್ಯವಿಲ್ಲ. ನಾವು ಬಹಳ ಘೋರವಾದ ಪಾಪ
ಮಾಡಿರುವುದರಿಂದ ಈ ಸಮಸ್ಯೆಯು ಒಂದೆರಡು ದಿನ
ಗಳಲ್ಲಿ ಮುಗಿಯುವಂಥದಲ್ಲ. 14ಈ ಕೂಟದಲ್ಲಿ ನಮ್ಮ
ಹಿರಿಯರು, ಪ್ರಧಾನರು ಒಂದು ತೀರ್ಮಾನಕ್ಕೆ ಬರಲಿ.
ಆಮೇಲೆ ನಮ್ಮನಮ್ಮ ಊರಿನಲ್ಲಿ ಅನ್ಯ ಸ್ತ್ರೀಯರನ್ನು
ಮದುವೆ ಆದವರು ತಮ್ಮ ಪ್ರಧಾನರೊಂದಿಗೆ ಒಂದು
ನೇಮಿತ ಸಮಯದಲ್ಲಿ ಇಲ್ಲಿಗೆ ಬರಲಿ. ಆಗ ದೇವರು
ನಮ್ಮ ಮೇಲಿರುವ ತನ್ನ ಕೋಪವನ್ನು ನಿವಾರಿಸುವನು''
ಎಂದು ಹೇಳಿದರು.
15ಕೆಲವೇ ಮಂದಿ ಈ ಯೋಜನೆಗೆ ಒಪ್ಪಲಿಲ್ಲ. ಅವರಲ್ಲಿ
ಅಸಾಹೇಲನ ಮಗನಾದ ಯೋನಾತಾನನೂ, ತಿಕ್ವನ ಮಗ
ನಾದ ಯೆಹ್ಜೆಯನೂ ಇದ್ದರು. ಮೆಷುಲ್ಲಾಮ್ ಮತ್ತು

**ದ್ರೋಹ** ಅನ್ಯಜನರನ್ನು ಮದುವೆ ಮಾಡಿಕೊಳ್ಳುವುದರ ಮೂಲಕ
ದೇವರ ಆಜ್ಞೆಯ ಉಲ್ಲಂಘನೆ.

ಲೇವಿಯನಾದ ಶಬ್ಬೆತೈ ಸಹ ಈ ಯೋಜನೆಗೆ ವಿರುದ್ಧ
ವಾಗಿದ್ದರು.
[16]ಜೆರುಸಲೇಮಿಗೆ ಹಿಂತಿರುಗಿಬಂದ ಇಸ್ರೇಲರು ಈ
ಯೋಜನೆಯನ್ನು ಒಪ್ಪಿದ ಬಳಿಕ ಎಜ್ರನು ಅವರವರ
ವಂಶದ ನಾಯಕರನ್ನು ಆರಿಸಿದನು. ಒಂದೊಂದು
ವಂಶಕ್ಕೆ ಒಬ್ಬೊಬ್ಬ ನಾಯಕನನ್ನು ಆರಿಸಿಕೊಂಡನು. ಪ್ರತಿ
ಯೊಬ್ಬನು ಹೆಸರಿಗನುಸಾರವಾಗಿ ಆರಿಸಲ್ಪಟ್ಟನು. ಹತ್ತ
ನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಆ ನಾಯಕ
ರೆಲ್ಲಾ ಒಟ್ಟಾಗಿಸೇರಿ ಒಂದೊಂದೇ ಪ್ರಕರಣಗಳನ್ನು
ವಿಚಾರಿಸಿದರು. [17]ಮೊದಲನೇ ತಿಂಗಳಿನ ಮೊದಲನೆಯ
ದಿನದಲ್ಲಿ ಎಲ್ಲಾ ಅನ್ಯಸ್ತ್ರೀಯರನ್ನು ಮದುವೆಯಾದವರ
ವಿಷಯವನ್ನು ಪರಿಶೀಲಿಸುವ ಕಾರ್ಯವನ್ನು
ಮುಗಿಸಿದರು.

### ಅನ್ಯಸ್ತ್ರೀಯರನ್ನು ಮದುವೆ ಆದವರ ಪಟ್ಟಿ

[18]ಯಾಜಕ ಸಂತತಿಯವರಲ್ಲಿ ಅನ್ಯಸ್ತ್ರೀಯರನ್ನು
ಮದುವೆಯಾದವರು: ಯೋಚಾದಾಕನ ಮಗನಾದ
ಯೇಷೂವ ಮತ್ತು ಅವನ ಸಹೋದರರಾದ ಮಾಸೇಯ,
ಎಲೀಯೆಜರ್, ಯಾರೀಬ್ ಮತ್ತು ಗೆದಲ್ಯ. [19]ಇವರೆಲ್ಲಾ
ತಮ್ಮ ಹೆಂಡತಿಯರನ್ನು ಬಿಟ್ಟುಬಿಡಬೇಕೆಂದು ತೀರ್ಮಾನಿ
ಸಿದರು. ಇವರಲ್ಲಿ ಪ್ರತಿಯೊಬ್ಬರು ದೋಷಪರಿಹಾರಕ್ಕಾಗಿ
ಹಿಂಡಿನ ಟಗರನ್ನು ಯಜ್ಞ ಮಾಡಿದರು. [20]ಇಮ್ಮೇರನ
ಸಂತತಿಯವರಲ್ಲಿ ಹನಾನೀ, ಜೆಬದ. [21]ಹಾರೀಮನ
ಸಂತತಿಯವರಲ್ಲಿ ಮಾಸೇಯ, ಎಲೀಯ, ಶೆಮಾಯ,
ಯೆಹೀಯೇಲ್ ಮತ್ತು ಉಜ್ಜೀಯ. [22]ಪಷ್ಹೂರನ
ಸಂತತಿಯವರಲ್ಲಿ ಎಲ್ಯೋವೇನೈ, ಮಾಸೇಯ,
ಇಷ್ಮಾಯೇಲ್, ನೆತನೇಲ್, ಯೋಜಾಬಾದ್ ಮತ್ತು
ಎಲ್ಲಾಸ.
[23]ಲೇವಿಯವರಲ್ಲಿ ಯೋಜಾಬಾದ್, ಶಿಮ್ಮೀ,
ಕೆಲೀಟ, ಪೆತಹ್ಯ, ಯೆಹೂದ, ಮತ್ತು ಎಲೀಯೆಜೆರ್.
ಇವರೆಲ್ಲಾ ಅನ್ಯಸ್ತ್ರೀಯರನ್ನು ವಿವಾಹ ಮಾಡಿ
ಕೊಂಡಿದ್ದರು.
[24]ಗಾಯಕರಲ್ಲಿ ಎಲ್ಯಾಷೀಬ್ ಎಂಬವನು ಅನ್ಯ
ಸ್ತ್ರೀಯನ್ನು ಮದುವೆ ಮಾಡಿಕೊಂಡಿದ್ದನು. ದ್ವಾರಪಾಲಕ
ರಲ್ಲಿ ಶಲ್ಲೂಮ್, ಟೆಲೆಮ್ ಮತ್ತು ಊರೀ.
[25]ಇಸ್ರೇಲ್ ಜನಾಂಗದವರಿಂದ ಪರೋಷನ ಸಂತಾನ
ದಲ್ಲಿ ರಮ್ಯಾಹ, ಇಜ್ಜೀಯ, ಮಲ್ಕೀಯ, ಮಿಯ್ಯಾಮಿನ್,
ಎಲ್ಲಾಜಾರ್, ಮಲ್ಕೀಯ ಮತ್ತು ಬೆನಾಯ.
[26]ಏಲಾಮನ ಸಂತತಿಯವರಲ್ಲಿ ಮತ್ತನ್ಯ, ಜೆಕರ್ಯ,
ಯೆಹೀಯೇಲ್, ಅಬ್ದೀ, ಯೆರೇಮೋತ್ ಮತ್ತು
ಏಲೀಯ.
[27]ಜತ್ತೂವಿನ ಸಂತತಿಯವರಲ್ಲಿ ಎಲ್ಯೋವೇನೈ,
ಎಲ್ಯಾಷೀಬ್, ಮತ್ತನ್ಯ, ಯೆರೇಮೋತ್, ಜಾಬಾದ್,
ಮತ್ತು ಅಜೀಜಾ.
[28]ಬೇಬೈಯ ಸಂತತಿಯಿಂದ ಯೆಹೋಹಾನಾನ್,
ಹನನ್ಯ, ಜಬ್ಬೈ ಮತ್ತು ಅತ್ಲೈ.
[29]ಬಾನೀ ಸಂತತಿಯಿಂದ ಮೆಷುಲ್ಲಾಮ್, ಮಲ್ಲೂಕ್,
ಆದಾಯ, ಯಾಷೂಬ್, ಶೆಯಾಲ್ ಮತ್ತು ರಾಮೋತ್.
[30]ಪಹತ್ ಮೋವಾಬನ ಸಂತತಿಯಿಂದ ಆದ್ನ,
ಕೆಲಾಲ್, ಬೆನಾಯ, ಮಾಸೇಯ, ಮತ್ತನ್ಯ, ಬೆಚಲೇಲ್,
ಬಿನ್ನೂಯ್ ಮತ್ತು ಮನಸ್ಸೆ.
[31]ಹಾರೀಮ್‌ನ ಸಂತತಿಯಿಂದ ಎಲೀಯೆಜೆರ್,
ಇಷ್ಷೀಯ, ಮಲ್ಕೀಯ, ಶೆಮಾಯ, ಸಿಮೆಯೋನ್,
[32]ಬೆನ್ಯಾಮೀನ್, ಮಲ್ಲೂಕ್ ಮತ್ತು ಶೆಮರ್ಯ.
[33]ಹಾಷುಮನ ಸಂತತಿಯಿಂದ ಮತ್ತೆನೈ, ಮತ್ತತ್ತ
ಜಾಬಾದ್, ಎಲಿಫೆಲೆಟ್, ಯೆರೇಮೈ, ಮನಸ್ಸೆ, ಮತ್ತು
ಶಿಮ್ಮೀ.
[34]ಬಾನೀಯ ಸಂತತಿಯಿಂದ ಮಾದೈ, ಅಮ್ರಾಮ್,
ಊವೇಲ್, [35]ಬೆನಾಯ, ಬೇದೆಯ, ಕೆಲೂಹು,
[36]ವನ್ಯಾಹ, ಮೆರೇಮೋತ್, ಎಲ್ಯಾಷೀಬ್, [37]ಮತ್ತನ್ಯ,
ಮತ್ತನೈ, ಮತ್ತು ಯಾಸೈ.
[38]ಬಿನ್ನೂಯಿಯ ಸಂತತಿಯವರಿಂದ ಯಾರೆಂದರೆ:
ಶಿಮ್ಮೀ,
[39]ಶೆಲೆಮ್ಯ, ನಾತಾನ್, ಆದಾಯ, [40]ಮಕ್ನದೆಬೈ,
ಶಾಷೈ, ಶಾರೈ, [41]ಅಜರೇಲ್, ಶೆಲೆಮ್ಯ, ಶೆಮರ್ಯ,
[42]ಶಲ್ಲೂಮ್, ಅಮರ್ಯ ಮತ್ತು ಯೋಸೇಫ್.
[43]ನೆಬೋನ ಸಂತತಿಯಿಂದ ಯೆಗೀಯೇಲ್, ಮತ್ತಿತ್ಯ,
ಜಾಬಾದ್, ಜೆಬೀನ, ಯದ್ದೈ, ಯೋವೇಲ್ ಮತ್ತು
ಬೆನಾಯ. [44]ಇವರೆಲ್ಲಾ ಅನ್ಯಸ್ತ್ರೀಯರನ್ನು ಮದುವೆ
ಯಾದವರು. ಕೆಲವರಿಗೆ ಆ ಸ್ತ್ರೀಯರಲ್ಲಿ ಮಕ್ಕಳೂ
ಹುಟ್ಟಿದ್ದರು.

# ನೆಹೆಮೀಯ

### ನೆಹೆಮೀಯನ ಪ್ರಾರ್ಥನೆ

1 ಇವು ನೆಹೆಮೀಯನ ಮಾತುಗಳು. ನೆಹೆಮೀಯನು
ಹಕಲ್ಯನ ಮಗ. ಕಿಸ್ಲೇವ್ ತಿಂಗಳಿನಲ್ಲಿ ರಾಜಧಾನಿ
ಯಾದ ಶೂಷನ್‌ನಲ್ಲಿ ನಾನು ಇದ್ದೆನು. ಅದು ಅರ್ತಷಸ್ತನ
ಆಳ್ವಿಕೆಯ ಇಪ್ಪತ್ತನೆಯ ವರ್ಷವಾಗಿತ್ತು. 2ನಾನು
ಶೂಷನ್‌ನಲ್ಲಿದ್ದಾಗ ನನ್ನ ಸಹೋದರರಲ್ಲಿ ಒಬ್ಬನಾದ
ಹನಾನೀ ಮತ್ತು ಇನ್ನಿತರರು ಯೆಹೂದ ಪ್ರಾಂತ್ಯದಿಂದ
ಬಂದಿದ್ದರು. ನಾನು ಅಲ್ಲಿರುವ ಯೆಹೂದ್ಯರ ಯೋಗ
ಕ್ಷೇಮದ ಬಗ್ಗೆ ವಿಚಾರಿಸಿದೆನು. ಈ ಯೆಹೂದ್ಯರು
ಸೆರೆವಾಸದಿಂದ ತಪ್ಪಿಸಿಕೊಂಡು ಇನ್ನೂ ಯೆಹೂದದಲ್ಲಿ
ವಾಸವಾಗಿದ್ದರು. ಜೆರುಸಲೇಮ್ ನಗರದ ವಿಷಯ
ವಾಗಿಯೂ ವಿಚಾರಿಸಿದೆನು.

3ಆಗ ಹನಾನೀ ಮತ್ತು ಅವನ ಜೊತೆಗಾರರು,
''ನೆಹೆಮೀಯನೇ, ಸೆರೆಯಿಂದ ತಪ್ಪಿಸಿಕೊಂಡು
ಯೆಹೂದ ಪ್ರಾಂತ್ಯಕ್ಕೆ ಹೋಗಿರುವವರು ತುಂಬಾ
ಶೋಚನೀಯ ಸ್ಥಿತಿಯಲ್ಲಿದ್ದಾರೆ. ನಾನಾ ಸಮಸ್ಯೆಗಳನ್ನೆ
ದುರಿಸಿ ನಾಚಿಕೆಗೆ ಗುರಿಯಾಗಿರುತ್ತಾರೆ. ಯಾಕೆಂದರೆ
ಜೆರುಸಲೇಮಿನ ಪೌಳಿಗೋಡೆಗಳು ಕೆಡವಲ್ಪಟ್ಟಿವೆ; ಅದರ
ಬಾಗಿಲುಗಳೆಲ್ಲಾ ಸುಟ್ಟುಹೋಗಿವೆ'' ಎಂದು ಹೇಳಿದರು.

4ಜೆರುಸಲೇಮಿನ ಪೌಳಿಗೋಡೆಯ ಮತ್ತು ಅಲ್ಲಿಯ
ಜನರ ವಿಚಾರವಾಗಿ ಕೇಳಿದಾಗ ನಾನು ತುಂಬಾ ಗಲಿಬಿಲಿ
ಗೊಂಡೆನು; ನಾನು ಅಲ್ಲಿಯೇ ನೆಲದ ಮೇಲೆ ಕುಳಿತು
ಅತ್ತೆನು; ದುಃಖಕ್ರಾಂತನಾದೆನು; ಅಲ್ಲದೆ ಕೆಲವು
ದಿವಸಗಳವರೆಗೆ ಉಪವಾಸಮಾಡಿ ಪರಲೋಕದ ದೇವ
ರಿಗೆ ಪ್ರಾರ್ಥಿಸಿದೆನು. 5ಆ ಮೇಲೆ ನಾನು ಹೀಗೆ
ಪ್ರಾರ್ಥಿಸಿದೆನು:

ಪರಲೋಕ ದೇವರಾದ ಯೆಹೋವನೇ, ''ನೀನು
ಮಹಾ ದೇವರೂ ಪರಾಕ್ರಮವುಳ್ಳ ದೇವರೂ ಆಗಿ
ರುವಿ. ನಿನ್ನನ್ನು ಪ್ರೀತಿಸಿ ನಿನ್ನ ಆಜ್ಞೆಗಳಿಗೆ ವಿಧೇಯ
ರಾಗುವವರಿಗೆ ನೀನು ಮಾಡಿದ ವಾಗ್ದಾನವನ್ನು
ನೆರವೇರಿಸುವವನಾಗಿರುವಿ. 6ಹಗಲಿರುಳು ನಿನ್ನಲ್ಲಿ
ಪ್ರಾರ್ಥಿಸುವ ನಿನ್ನ ಸೇವಕನನ್ನು ಕಣ್ತೆರೆದು ನೋಡು:
ಅವನ ಪ್ರಾರ್ಥನೆಗೆ ಕಿವಿಗೊಟ್ಟು ಆಲಿಸು. ನಿನ್ನ
ಸೇವಕರಾದ ಇಸ್ರೇಲರಿಗಾಗಿ ನಾನು ಪ್ರಾರ್ಥಿಸು
ತ್ತಿದ್ದೇನೆ. ಇಸ್ರೇಲರಾದ ನಾವು ನಿನಗೆ ವಿರೋಧ
ವಾಗಿ ಮಾಡಿದ ಪಾಪಗಳನ್ನು ನಾನು ನಿನಗೆ ಅರಿಕೆ
ಮಾಡುತ್ತೇನೆ. ನಾನೂ ನನ್ನ ತಂದೆಯ ಮನೆಯ
ವರೂ ನಿನಗೆ ವಿರುದ್ಧವಾಗಿ ಮಾಡಿದ ಪಾಪಗಳನ್ನು
ನಿನಗೆ ಅರಿಕೆ ಮಾಡುತ್ತೇವೆ. 7ಇಸ್ರೇಲರಾದ ನಾವು
ನಿನಗೆ ಕೆಟ್ಟವರಾಗಿ ಜೀವಿಸಿದೆವು; ನೀನು ನಿನ್ನ ಸೇವಕ
ನಾದ ಮೋಶೆಗೆ ಕೊಟ್ಟ ವಿಧಿನಿಯಮಗಳಿಗೆ ನಾವು
ವಿಧೇಯರಾಗಲಿಲ್ಲ.

8ನಿನ್ನ ಸೇವಕನಾದ ಮೋಶೆಗೆ ನೀನು ಹೇಳಿದ್ದನ್ನು
ನೆನಪುಮಾಡಿಕೊ, ನೀನು ಅವನಿಗೆ, ''ಇಸ್ರೇಲ್
ಜನರಾದ ನೀವು ನಂಬಿಗಸ್ತರಾಗದಿದ್ದಲ್ಲಿ ನಿಮ್ಮನ್ನು
ಅನ್ಯ ದೇಶಗಳಲ್ಲಿ ಚದರಿಸಿಬಿಡುವೆನು. 9ಆದರೆ
ನೀವು ಹಿಂತಿರುಗಿ ನನ್ನ ಬಳಿಗೆ ಬಂದು, ನನ್ನ
ಕಟ್ಟಳೆಗಳಿಗೆ ವಿಧೇಯರಾದರೆ, ನಿಮ್ಮ ಜನರನ್ನು
ಬಲವಂತವಾಗಿ ಭೂಲೋಕದ ಕಟ್ಟಕಡೆಯವರೆಗೆ
ಕೊಂಡೊಯ್ದಿದ್ದರೂ ಅಲ್ಲಿಂದ ನನ್ನ ಹೆಸರನ್ನು ನೆಲೆ
ಗೊಳಿಸುವುದಕ್ಕಾಗಿ ನಾನು ಆರಿಸಿಕೊಂಡ ಸ್ಥಳಕ್ಕೆ
ಕರೆದುಕೊಂಡು ಬರುವೆನು.''

10ಇಸ್ರೇಲ್ ಜನರು ನಿನ್ನ ಜನಾಂಗ; ಅವರು ನಿನ್ನ
ಸೇವಕರಾಗಿದ್ದಾರೆ. ನೀನು ನಿನ್ನ ಮಹಾಶಕ್ತಿಯನ್ನು
ಉಪಯೋಗಿಸಿ ಅವರನ್ನು ರಕ್ಷಿಸಿರುವೆ. 11ಆದುದ
ರಿಂದ ಯೆಹೋವನೇ, ನನ್ನ ಪ್ರಾರ್ಥನೆಯನ್ನು
ಆಲೈಸು. ನಾನು ನಿನ್ನ ಸೇವಕ. ನಿನ್ನ ಹೆಸರನ್ನು ಗೌರವಿ
ಸುವ ನಿನ್ನ ಸೇವಕರ ಪ್ರಾರ್ಥನೆಗೆ ಕಿವಿಗೊಡು. ನಾನು
ಅರಸನ ಪಾನದಾಯಕನಾಗಿದ್ದೆನೆಂದು ನೀನು ತಿಳಿದಿ
ರುವೆ. ಆದುದರಿಂದ ಈ ಹೊತ್ತು ನನಗೆ ಸಹಾಯ
ಮಾಡು. ಅರಸನಲ್ಲಿ ಸಹಾಯಕ್ಕಾಗಿ ಕೇಳಿಕೊಳ್ಳು
ವಾಗ ನನಗೆ ನೆರವು ನೀಡು; ನನಗೆ ಯಶಸ್ಸನ್ನು ದಯ
ಪಾಲಿಸು; ರಾಜನಿಗೆ ನಾನು ಮೆಚ್ಚಿಕೆಕರವಾಗಿ ಕಂಡು
ಬರುವಂತೆ ಸಹಾಯಮಾಡು.

## ನೆಹೆಮೀಯನನ್ನು ಅರ್ತಷಸ್ತನು ಜೆರುಸಲೇಮಿಗೆ ಕಳುಹಿಸಿದ್ದು

2 ಅರ್ತಷಸ್ತನ ಆಳ್ವಿಕೆಯ ಇಪ್ಪತ್ತನೆಯ ವರ್ಷದ
ನಿಸ್ಸಾನ್ ತಿಂಗಳಲ್ಲಿ ರಾಜನಿಗೆ ದ್ರಾಕ್ಷಾರಸವನ್ನು
ನಾನು ಕೊಟ್ಟೆನು. ನಾನೆಂದೂ ರಾಜನ ಮುಂದೆ ದುಃಖಿತ
ನಾಗಿರಲಿಲ್ಲ. ಆದರೆ ಈ ಸಮಯದಲ್ಲಿ ನನ್ನ ಮುಖವು
ಕಳೆಗುಂದಿದ್ದರಿಂದ, [2]"ನೀನು ಕ್ಷೇಮವೋ?" ಎಂದು
ಅರಸನು ವಿಚಾರಿಸಿದನು, "ನೀನು ದುಃಖಿತನಾಗಿರುವು
ದೇಕೆ? ನಿನ್ನ ಹೃದಯವು ವೇದನೆಯಿಂದ ತುಂಬಿರುವ
ಹಾಗಿದೆಯಲ್ಲ?' ಅರಸನ ಈ ಪ್ರಶ್ನೆಗೆ ನಾನು ಭಯ
ಪಟ್ಟೆನು. [3]ನಾನು ಭಯದಿಂದಲೇ, "ಅರಸನೇ ಚಿರಂ
ಜೀವಿಯಾಗಿರು. ನನ್ನ ಪೂರ್ವಿಕರ ಸಮಾಧಿಗಳಿರುವ
ಪಟ್ಟಣವು ಹಾಳು ದಿಬ್ಬವಾಗಿರುವುದರಿಂದ ನಾನು ದುಃಖಿ
ತನಾಗಿದ್ದೇನೆ; ಅದರ ಬಾಗಿಲುಗಳು ಬೆಂಕಿಯಿಂದ ಸುಟ್ಟು
ಹೋಗಿವೆ" ಅಂದೆನು.

[4]ಆಗ ಅರಸನು, "ನಾನು ನಿನಗೆ ಏನು ಮಾಡಬೇಕೆಂದು
ಅಪೇಕ್ಷಿಸುವೆ?" ಎಂದು ಕೇಳಿದಾಗ ಅವನಿಗೆ ಉತ್ತರಿಸುವ
ಮೊದಲು ನಾನು ಪರಲೋಕದ ದೇವರಿಗೆ ಪ್ರಾರ್ಥಿಸಿ
ದೆನು. [5]ಅನಂತರ ಅರಸನಿಗೆ, "ನಾನು ನಿನಗೆ ಮೆಚ್ಚಿಕೆ
ಯಾಗಿದ್ದಲ್ಲಿ ಮತ್ತು ನಿನಗೆ ಈ ವಿಷಯ ಸರಿ ಕಂಡಲ್ಲಿ
ದಯಮಾಡಿ ಯೆಹೂದ ಪ್ರಾಂತ್ಯದಲ್ಲಿ ನನ್ನ ಪೂರ್ವಿಕರ
ಸಮಾಧಿಗಳಿರುವ ಜೆರುಸಲೇಮಿಗೆ ಕಳುಹಿಸು. ನಾನು
ಅಲ್ಲಿಗೆ ಹೋಗಿ ಜೆರುಸಲೇಮನ್ನು ಮತ್ತೆ ಕಟ್ಟಬೇಕು"
ಎಂದೆನು.

[6]ರಾಣಿಯು ರಾಜನ ಪಕ್ಕದಲ್ಲಿ ಕುಳಿತಿದ್ದಳು. ರಾಜನೂ
ರಾಣಿಯೂ, "ನಿನಗೆ ಹೋಗಿ ಬರಲು ಎಷ್ಟು ಸಮಯ
ಬೇಕಾಗುವುದು? ನೀನು ಹಿಂದಕ್ಕೆ ಯಾವಾಗ ಬರುವಿ?
ಎಂದು ವಿಚಾರಿಸಿದರು. ನನ್ನನ್ನು ಕಳುಹಿಸಲು ರಾಜನಿಗೆ
ಸಂತೋಷವಿದ್ದುದರಿಂದ ನಾನೊಂದು ಸಮಯವನ್ನು
ಸೂಚಿಸಿದೆನು. [7]ಆಮೇಲೆ "ರಾಜನೇ, ನನಗೆ ಸಹಾಯ
ವನ್ನು ಮಾಡಲು ನೀನು ಇಚ್ಛಿಸುವುದಾದರೆ ಯೂಫ್ರೇ
ಟೀಸ್ ನದಿಯ ಪಶ್ಚಿಮದ ಪ್ರಾಂತ್ಯದ ರಾಜ್ಯಪಾಲರಿಗೆ
ಪತ್ರಗಳನ್ನು ಬರೆದುಕೊಟ್ಟರೆ ನಾನು ಯೆಹೂದಕ್ಕೆ ಅವರ
ಪ್ರಾಂತ್ಯಗಳ ಮೂಲಕವಾಗಿ ಸುರಕ್ಷಿತವಾಗಿ ಹೋಗಲು
ಸಾಧ್ಯವಾಗುವುದು. [8]ಅಲ್ಲದೆ ಬಾಗಿಲುಗಳಿಗೆ, ಗೋಡೆ
ಗಳಿಗೆ, ದೇವಾಲಯದ ಆವರಣದ ಗೋಡೆಗಳಿಗೆ ಮತ್ತು
ನನ್ನ ಮನೆಗೆ ಮರದ ತೊಲೆಗಳು ಬೇಕಾಗಿವೆ. ಆದ್ದರಿಂದ
ನಿಮ್ಮ ಅರಣ್ಯಗಳ ಮುಖ್ಯಾಧಿಕಾರಿಯಾದ ಆಸಾಫನಿಗೂ
ಪತ್ರವನ್ನು ಕೊಡಬೇಕು" ಎಂದು ವಿನಂತಿಸಿದೆನು.
ಅರಸನು ಪತ್ರಗಳನ್ನು ಮತ್ತು ನಾನು ಕೇಳಿದ್ದೆಲ್ಲವನ್ನು
ನನಗೆ ಕೊಟ್ಟನು. ದೇವರು ನನ್ನನ್ನು ಕರುಣಿಸಿರುವುದ
ರಿಂದ ರಾಜನು ನನಗೆ ಹಾಗೆ ಮಾಡಿದನು.

[9]ಯೂಫ್ರೇಟೀಸ್ ನದಿಯ ಪಶ್ಚಿಮದಲ್ಲಿರುವ ರಾಜ್ಯ
ಪಾಲರಿಗೆ ಅರಸನು ಕೊಟ್ಟ ಪತ್ರವನ್ನು ಕೊಟ್ಟೆನು.
ರಾಜನು ನನ್ನೊಂದಿಗೆ ಸಿಪಾಯಿಗಳನ್ನೂ ಸೈನ್ಯಾಧಿಪತಿ
ಗಳನ್ನೂ ಅಶ್ವಸೈನಿಕರನ್ನೂ ಕಳುಹಿಸಿದ್ದನು. [10]ನಾನು ಏನು
ಮಾಡುತ್ತಿದ್ದೇನೆಂದು ಸನ್ಬಲ್ಲಟ್ ಮತ್ತು ಟೋಬೀಯ
ಎಂಬವರಿಬ್ಬರು ಕೇಳಿಸಿಕೊಂಡರು. ಇಸ್ರೇಲ್ ಜನರಿಗೆ
ಸಹಾಯ ಮಾಡಲು ಬರುತ್ತಿದ್ದಾರೆಂಬ ವಿಷಯವು
ಅವರನ್ನು ತಳ ಮಳಗೊಳಿಸಿತು ಮತ್ತು ಅವರಿಗೆ ಸಿಟ್ಟೂ
ಬಂದಿತು. ಸನ್ಬಲ್ಲಟನು ಹೋರೋನಿನವನು ಮತ್ತು
ಟೋಬೀಯನು ಅಮ್ಮೋನಿಯ ಅಧಿಕಾರಿಯಾಗಿದ್ದನು.

## ನೆಹೆಮೀಯನಿಂದ ಜೆರುಸಲೇಮಿನ ಗೋಡೆಗಳ ಪರೀಕ್ಷೆ

[11-12]ನಾನು ಜೆರುಸಲೇಮ್ ಸೇರಿದ ನಂತರ ಮೂರು
ದಿವಸ ಅಲ್ಲಿಯೇ ಉಳಿದೆನು. ಜೆರುಸಲೇಮಿಗೋಸ್ಕರ
ಮಾಡತಕ್ಕ ಕಾರ್ಯದ ಬಗ್ಗೆ ದೇವರು ನನ್ನಲ್ಲಿ ಯಾವ
ಆಲೋಚನೆಯನ್ನು ಹುಟ್ಟಿಸಿದ್ದಾನೆಂದು ನಾನು
ಯಾರಿಗೂ ತಿಳಿಸದೆ ನನ್ನೊಂದಿಗಿದ್ದ ಕೆಲವು ಜನರೊಂದಿಗೆ
ರಾತ್ರಿಯಲ್ಲಿ ಹೊರಟೆನು. ನಾನು ಸವಾರಿಮಾಡಿಕೊಂಡು
ಬಂದಿದ್ದ ಕುದುರೆಯೊಂದಲ್ಲದೆ ಬೇರೆ ಯಾವ
ಕುದುರೆಯೂ ಅಲ್ಲಿರಲಿಲ್ಲ. [13]ಕತ್ತಲೆಯಲ್ಲಿಯೇ
ಕಣಿವೆಯ ಬಾಗಿಲಿನ ಮೂಲಕ ಹೊರಟು ಕೆಡವಲ್ಪಟ್ಟಿದ್ದ
ಜೆರುಸಲೇಮಿನ ಗೋಡೆಗಳನ್ನು ಸುಟ್ಟುಹೋಗಿರುವ
ಅದರ ಬಾಗಿಲುಗಳನ್ನು ನೋಡುತ್ತಾ ಹೆಬ್ಬಾವು ಬಾವಿಯ
ಬಳಿಗೂ ತಿಪ್ಪೆಬಾಗಿಲಿನ ಬಳಿಗೂ ಸವಾರಿಮಾಡಿಕೊಂಡು
ಬಂದೆನು. [14]ಅಲ್ಲಿಂದ ಬುಗ್ಗೆ ಬಾಗಿಲಿಗೂ ಅರಸನ
ಕೊಳಕ್ಕೂ ಬಂದೆನು. ಇಲ್ಲಿಂದ ಮುಂದಕ್ಕೆ ಹೋಗಲು
ನನ್ನ ಕುದುರೆಗೆ ಸಾಧ್ಯವಾಗಲಿಲ್ಲ; [15]ಆದ್ದರಿಂದ ನಾನು
ರಾತ್ರಿಯಲ್ಲಿ ಹಳ್ಳದ ಮಾರ್ಗದಿಂದ ಹತ್ತುತ್ತಾ ಗೋಡೆ
ಗಳನ್ನು ಪರೀಕ್ಷಿಸಿ ಕೊನೆಗೆ ಹಿಂದಿರುಗಿ ಕಣಿವೆ ಬಾಗಿಲ
ಮೂಲಕ ಮನೆ ಸೇರಿದೆನು. [16]ಇಸ್ರೇಲಿನ ನಾಯಕರಿಗೂ
ಅಧಿಕಾರಿಗಳಿಗೂ ನಾನು ಎಲ್ಲಿಗೆ ಹೋದನೆಂದು ತಿಳಿದಿ
ರಲಿಲ್ಲ; ನಾನು ಏನು ಮಾಡುತ್ತಿದ್ದೇನೆಂದೂ ಅವರಿಗೆ
ಗೊತ್ತಿರಲಿಲ್ಲ. ಯೆಹೂದ್ಯರಿಗಾಗಲೀ ಅಧಿಕಾರಿಗಳಿ
ಗಾಗಲೀ ರಾಜನಿಂದ ನೇಮಕಗೊಂಡ ಕೆಲಸ ವರ್ಗದವರಿ
ಗಾಗಲೀ ನಾನು ಇನ್ನು ಯಾವ ವಿಷಯವನ್ನೂ
ಹೇಳಿರಲಿಲ್ಲ.

[17]ಆಮೇಲೆ ನಾನು ಎಲ್ಲಾ ಜನರಿಗೆ, "ನಮ್ಮ ದುರವಸ್ಥೆ
ಯನ್ನು ನೀವು ನೋಡುತ್ತಿದ್ದೀರಿ. ಜೆರುಸಲೇಮ್ ಒಂದು
ಹಾಳು ದಿಬ್ಬವಾಗಿದೆ; ಅದರ ಬಾಗಿಲುಗಳು ಸುಟ್ಟು ಬೂದಿ
ಯಾಗಿವೆ. ಬನ್ನಿರಿ, ನಾವು ಜೆರುಸಲೇಮಿನ ಪೌಳಿಗೋಡೆ
ಗಳನ್ನು ತಿರುಗಿ ಕಟ್ಟೋಣ. ಆಗ ನಾವು ಇನ್ನೆಂದಿಗೂ

ನಾಚಿಕೆಗೆ ಗುರಿಯಾಗುವುದಿಲ್ಲ'' ಎಂದು ಹೇಳಿದೆನು.
[18]ನಾನು ಅವರಿಗೆ ದೇವರು ನನಗೆ ಕರುಣೆಯನ್ನು ತೋರಿ
ಸಿದ್ದನ್ನು ಮತ್ತು ರಾಜನು ಹೇಳಿದ ವಿಷಯಗಳನ್ನು
ತಿಳಿಸಿದೆನು. ಆಗ ಅವರು, ''ನಾವು ಈಗಲೇ ಕೆಲಸ
ಪ್ರಾರಂಭಿಸೋಣ'' ಎಂದು ಹೇಳಿದರು. ಹೀಗೆ ನಾವು ಈ
ಒಳ್ಳೆಯ ಕಾರ್ಯವನ್ನು ಪ್ರಾರಂಭಿಸಿದೆವು. [19]ಆದರೆ
ಹೋರೋನಿನ ಸನ್ಬಲ್ಲಟನು, ಟೋಬೀಯ ಅಮ್ಮೋನಿ
ಯನಾದ ಅಧಿಕಾರಿ ಮತ್ತು ಅರಬಿಯವನಾದ ಗೆಷೆಮ್
ಇವರುಗಳು ನಾವು ಪೌಳಿಗೋಡೆಯನ್ನು ಕಟ್ಟುತ್ತೇವೆಂಬ
ಸುದ್ದಿಯನ್ನು ಕೇಳಿ ಅಸಹ್ಯವಾಗಿ ಗೇಲಿ ಮಾಡಿ, ''ನೀವು
ಮಾಡುತ್ತಿರುವುದೇನು? ರಾಜನಿಗೆ ವಿರುದ್ಧವಾಗಿ ದಂಗೆ
ಏಳುತ್ತಿರುವಿರೋ?'' ಎಂದು ಕೇಳಿದರು.

[20]ನಾನು ಅವರಿಗೆ, ''ಪರಲೋಕದ ದೇವರು ನಮ್ಮ
ಕಾರ್ಯವನ್ನು ಸಫಲಪಡಿಸುವನು. ನಾವು ಆತನ ಸೇವ
ಕರು ಮತ್ತು ನಾವು ಈ ಪಟ್ಟಣವನ್ನು ತಿರಿಗಿ ಕಟ್ಟುತ್ತೇವೆ.
ನೀವು ನಮ್ಮ ಸಹಾಯಕ್ಕಾಗಿ ಬರುವುದು ಬೇಡ. ನಿಮ್ಮಲ್ಲಿ
ಯಾರ ಕುಟುಂಬಗಳವರೂ ಈ ಜೆರುಸಲೇಮಿನಲ್ಲಿ
ವಾಸಿಸಲಿಲ್ಲ ಮತ್ತು ಈ ಪ್ರಾಂತ್ಯದಲ್ಲಿ ನಿಮಗೆ ಸ್ವಂತ
ಭೂಮಿಯೂ ಇಲ್ಲ. ಆದುದರಿಂದ ನಿಮಗೆ ಈ ಪ್ರಾಂತ್ಯ
ದಲ್ಲಿ ಯಾವ ಹಕ್ಕೂ ಇಲ್ಲ'' ಎಂದು ಹೇಳಿದೆನು.

## ಪೌಳಿಗೋಡೆಯನ್ನು ಕಟ್ಟಿದವರು

3 ಎಲ್ಯಾಷೀಬನು ಮಹಾಯಾಜಕನಾಗಿದ್ದನು.
ಅವನೂ ಮತ್ತು ಯಾಜಕರುಗಳಾಗಿದ್ದ ಅವನ
ಸಹೋದರರೂ ಕುರಿಹೆಬ್ಬಾಗಿಲನ್ನು ಕಟ್ಟಿದರು. ನಂತರ
ಪ್ರಾರ್ಥಿಸಿ ಯೆಹೋವನಿಗೆ ಅದನ್ನು ಪ್ರತಿಷ್ಠಿಸಿದರು.
ಅವರು ಅದಕ್ಕೆ ಬಾಗಿಲುಗಳನ್ನು ಜೋಡಿಸಿದರು. ಆ
ಯಾಜಕರು ನೂರುಗೋಪುರ ಮತ್ತು ಹನನೇಲ್
ಗೋಪುರದವರೆಗೂ ಜೆರುಸಲೇಮಿನ ಗೋಡೆಯನ್ನು
ಕಟ್ಟಿದರು. ಅವರು ಪ್ರಾರ್ಥಿಸಿ ಯೆಹೋವನಿಗೆ ಪ್ರತಿಷ್ಠಿ
ಸಿದರು. [2]ಯಾಜಕರು ಕಟ್ಟನಿಲ್ಲಿಸಿದ್ದ ಸ್ಥಳದಿಂದ
ಯೆರಿಕೋದವರು ಗೋಡೆ ಕಟ್ಟಿದರು, ಯೆರಿಕೋದ
ವರು ಕಟ್ಟನಿಲ್ಲಿಸಿದ್ದ ಸ್ಥಳದಿಂದ ಇಮ್ರಿಯ ಮಗನಾದ
ಜಕ್ಕೂರನು ಗೋಡೆ ಕಟ್ಟಿದನು.

[3]ಹಸ್ಸೆನಾಹನ ಗಂಡು ಮಕ್ಕಳು ಮೀನುಬಾಗಿಲನ್ನು ಕಟ್ಟಿ
ಅದರ ಮೇಲೆ ತೊಲೆಗಳನ್ನಿಟ್ಟು ಅದಕ್ಕೆ ಕದಗಳು, ಅಗುಳಿ,
ತಿರುಗಣೆಗಳನ್ನಿಟ್ಟು ಭದ್ರಪಡಿಸಿದರು.

[4]ಇವನ ನಂತರ ಊರೀಯನ ಮಗನಾದ ಮೆರೇಮೋ
ತನು ಗೋಡೆಯನ್ನು ಕಟ್ಟಿದನು. (ಊರಿಯನು ಹಕ್ಕೋ
ಚನ ಮಗ.) ಇದರ ಮುಂದಿನ ಭಾಗವನ್ನು ಬೆರೆಕ್ಯನ
ಮಗನಾದ ಮೆಷುಲ್ಲಾಮನು ಕಟ್ಟಿದನು. (ಬೆರೆಕ್ಯನು
ಮೆಷೇಜಬೇಲನ ಮಗ.) ಈ ಗೋಡೆಯ ನಂತರದ
ಭಾಗವನ್ನು ಬಾನನ ಮಗನಾದ ಚಾದೋಕನು ಕಟ್ಟಿದನು.
[5]ತೆಕೋವದವರು ಅಲ್ಲಿಂದಾಚೆಗೆ ಗೋಡೆ ಕಟ್ಟಿದರು.
ಆದರೆ ಅವರ ನಾಯಕರು ತಮ್ಮ ರಾಜ್ಯಪಾಲನಾದ
ನೆಹೆಮೀಯನಿಗಾಗಿ ಕೆಲಸಮಾಡಲು ಒಪ್ಪಲಿಲ್ಲ.

[6]ಯೋಯಾದ ಮತ್ತು ಮೆಷುಲ್ಲಾಮ್ ಹಳೆಬಾಗಿಲನ್ನು
ಜೋಡಿಸಿದರು. ಯೋಯಾದನು ಪಾಸೇಹನ ಮಗ;
ಮೆಷುಲ್ಲಾಮನು ಬೆಸೋದ್ಯನ ಮಗ. ಅವರು ತೊಲೆ
ಗಳನ್ನು ಇಟ್ಟರು; ಬಾಗಿಲುಗಳನ್ನು ಕದಗಳನ್ನು ಅಗುಳಿ
ಗಳನ್ನು ಜೋಡಿಸಿದರು.

[7]ಗಿಬ್ಯೋನ್ ಮತ್ತು ಮಿಚ್ಪದ ಜನರು ಅಲ್ಲಿಂದಾಚೆಗೆ
ಗೋಡೆಯನ್ನು ಕಟ್ಟಿದರು. ಗಿಬ್ಯೋನಿನ ಮೆಲೆಟ್ಯ ಎಂಬ
ವನು ಮತ್ತು ಮೇರೋನೋತಿನ ಯಾದೋನ್ ಎಂಬ
ವನು ಈ ಕೆಲಸವನ್ನು ಮಾಡಿದರು. ಗಿಬ್ಯೋನ್ ಮತ್ತು
ಮೇರೋನೋತ್ ಯೂಫ್ರೇಟೀಸ್ ನದಿಯ ಪಶ್ಚಿಮ
ಪ್ರಾಂತ್ಯದ ರಾಜ್ಯಪಾಲರುಗಳ ಆಡಳಿತಕ್ಕೆ ಒಳಪಟ್ಟಿತ್ತು.

[8]ಹರ್ಹಯನ ಮಗನಾದ ಉಜ್ಜೀಯೇಲನು ಅಲ್ಲಿಂದಾ
ಚೆಗೆ ಕಟ್ಟಿದನು. ಉಜ್ಜೀಯೇಲನು ಅಕ್ಕಸಾಲಿಗನಾಗಿ
ದ್ದನು; ಹನನ್ಯನು ಸುಗಂಧದ್ರವ್ಯವನ್ನು ತಯಾರು ಮಾಡು
ತ್ತಿದ್ದನು. ಇವರು, ''ಅಗಲಗೋಡೆ''ಯವರೆಗೂ ಜೆರುಸ
ಲೇಮ್ ಗೋಡೆಯನ್ನು ಕಟ್ಟಿದರು.

[9]ಅರ್ಧ ಜೆರುಸಲೇಮಿನ ರಾಜ್ಯಪಾಲನಾಗಿದ್ದ ಹೂರನ
ಮಗನಾದ ರೆಫಾಯನು ಮುಂದಿನ ಭಾಗವನ್ನು ಕಟ್ಟಿ
ಮುಗಿಸಿದನು.

[10]ಹರೂಮಫನ ಮಗನಾದ ಯೆದಾಯನು ಅಲ್ಲಿಂದಾ
ಚೆಗೆ ಗೋಡೆ ಕಟ್ಟಿದನು. ಅದು ಅವನ ಮನೆಯ ನಂತರವೇ
ಇತ್ತು. ಅಲ್ಲಿಂದಾಚೆಗೆ ಹಷಬ್ನೆಯನ ಮಗನಾದ
ಹಟ್ಟೂಷನು ಕಟ್ಟಿದನು. [11]ಹಾರೀಮನ ಮಗನಾದ
ಮಲ್ಕೀಯನು, ಪಹತ್ಮೋವಾಬನ ಮಗನಾದ ಹಷ್ಶೂ
ಬನು ಅಲ್ಲಿಂದಾಚೆಗೆ ಕಟ್ಟಿದರು. ಅವರು ಒಲೆಬುರುಜನ್ನು
ಸಹ ಕಟ್ಟಿದರು. [12]ಹಲ್ಲೋಹೇಷನ ಮಗನಾದ ಶಲ್ಲೂ
ಮನು ಮುಂದಿನ ಭಾಗವನ್ನು ರಿಪೇರಿ ಮಾಡಿದನು. ಅವನ
ಹೆಣ್ಣುಮಕ್ಕಳು ಅವನಿಗೆ ಸಹಾಯ ಮಾಡಿದರು.
ಶಲ್ಲೂಮನು ಜೆರುಸಲೇಮಿನ ಇನ್ನೊಂದು ಭಾಗದ
ರಾಜ್ಯಪಾಲಕನಾಗಿದ್ದನು.

[13]ಜಾನೋಹ ಪಟ್ಟಣದಲ್ಲಿ ವಾಸಿಸುವ ಹಾನೂನನು
ಅವನ ಸಂಗಡಿಗರೂ ಕಣಿವೆ ಬಾಗಿಲನ್ನು ಕಟ್ಟಿ ಅದಕ್ಕೆ
ಅಗುಳಿ, ತಿರುಗಣೆ, ಕದಗಳನ್ನಿಟ್ಟು ಭದ್ರಪಡಿಸಿದರು.
ಅಲ್ಲದೆ ಒಂದು ಸಾವಿರ ಮೊಳದಷ್ಟು ಉದ್ದದ ಗೋಡೆ
ಯನ್ನು ಕಟ್ಟಿ ತಿಪ್ಪೆಬಾಗಿಲಿನ ತನಕ ಮುಂದುವರಿದರು.
[14]ರೇಕಾಬನ ಮಗನಾದ ಮಲ್ಕೀಯನು ತಿಪ್ಪೆಬಾಗಿಲನ್ನು
ರಿಪೇರಿಮಾಡಿಸಿದನು. ಇವನು ಬೇತ್ಹಕ್ಕೆರೆಮಿನ ರಾಜ್ಯ
ಪಾಲಕನಾಗಿದ್ದನು. ಅವನು ಬಾಗಿಲಿಗೆ ಕದ, ತಿರುಗಣೆ,

ಅಗುಳಿಗಳನ್ನಿಟ್ಟು ಭದ್ರಪಡಿಸಿದನು. 15ಮಿಚ್ಪ ಜಿಲ್ಲಾಧಿ
ಕಾರಿಯಾದ ಶಲ್ಲೂನನು ಬುಗ್ಗೆಬಾಗಿಲನ್ನು ರಿಪೇರಿ
ಮಾಡಿದನು. ಶಲ್ಲೂನನು ಕೊಲ್ಹೋಜೆಯನ ಮಗ.
ಬಾಗಿಲಿಗೆ ಕದ, ತಿರುಗಣಿ, ಅಗುಳಿಗಳನ್ನಿಟ್ಟು, ಭದ್ರ
ಪಡಿಸಿದನು. ನಂತರ ಗೋಡೆಯನ್ನು ರಾಜನ ತೋಟದ
ಸಮೀಪದಲ್ಲಿದ್ದ ಸಿಲೋವ ಕೊಳದ ತನಕ ಮುಂದುವರಿಸಿ
ದಾವೀದನಗರಕ್ಕೆ ಪ್ರವೇಶಿಸುವ ಮೆಟ್ಟಿಲುಗಳ ತನಕ
ಗೋಡೆಯನ್ನು ಕಟ್ಟಿದನು.

16ಅಜ್ಬೂಕನ ಮಗನಾದ ನೆಹೆಮೀಯನು ಗೋಡೆಯ
ಮುಂದಿನ ಭಾಗವನ್ನು ಕಟ್ಟಿದನು. ಇವನು ಬೇತ್ಬೂರ್
ಜಿಲ್ಲೆಯ ಅರ್ಧಭಾಗಕ್ಕೆ ಅಧಿಕಾರಿಯಾಗಿದ್ದನು.
ದಾವೀದನ ಸಮಾಧಿಯ ತನಕ ಗೋಡೆಯನ್ನು ಮುಂದು
ವರಿಸಿ ವೀರರ ಮನೆಗಳ ತನಕ ಕಟ್ಟಿದನು.

17ಮುಂದಿನ ಭಾಗವನ್ನು ಲೇವಿಯರು ಕಟ್ಟಿದರು.
ಅವರ ಮುಖ್ಯಸ್ತನು ಬಾನಿಯ ಮಗನಾದ ರೆಹೂಮನು.
ಕೆಯೀಲ ಎಂಬ ಅರ್ಧ ಜಿಲ್ಲೆಗೆ ರಾಜ್ಯಪಾಲಕನಾಗಿದ್ದ
ಹಷಬ್ಯನು ಇದರ ಮುಂದಿನ ಭಾಗದ ಗೋಡೆಯನ್ನು
ಕಟ್ಟಿದನು. ಇವನು ತನ್ನ ಜಿಲ್ಲೆಯಲ್ಲಿ ಮಾತ್ರ ರಿಪೇರಿ
ಮಾಡಿದನು.

18ಅವರ ಸಹೋದರರು ಇನ್ನೊಂದು ಕೆಯೀಲ ಅರ್ಧ
ಜಿಲ್ಲೆಗೆ ರಾಜ್ಯಪಾಲನಾಗಿದ್ದ ಬಿನ್ನೈನ ನಾಯಕತ್ವದಲ್ಲಿ
ಮುಂದಿನ ಭಾಗದ ಗೋಡೆಯನ್ನು ರಿಪೇರಿ ಮಾಡಿದರು.
ಬಿನ್ನೈ ಹೇನಾದಾದನ ಮಗ.

19ಮಿಚ್ಪದ ರಾಜ್ಯಪಾಲನಾದ ಏಜೆರನು ಮುಂದಿನ
ಭಾಗವನ್ನು ರಿಪೇರಿ ಮಾಡಿದನು. ಏಜೆರನು ಯೇಷೂವನ
ಮಗ. ಇವನು ಆಯುಧ ಕೋಣೆಯಿಂದ ಹಿಡಿದು
ಗೋಡೆಯ ಮೂಲೆಯ ತನಕ ರಿಪೇರಿಮಾಡಿದನು.
20ಜಬ್ಬೈಯ ಮಗನಾದ ಬಾರೂಕನು ಮುಂದಿನ ಭಾಗ
ವನ್ನು ರಿಪೇರಿಮಾಡಿದನು. ಇವನು ಪ್ರಯಾಸಪಟ್ಟು
ಮೂಲೆಯಿಂದ ಹಿಡಿದು ಪ್ರಧಾನಯಾಜಕನಾದ
ಎಲ್ಯಾಷೀಬನ ಮನೆಮುಂದಿನ ಬಾಗಿಲಿನ ತನಕ ಗೋಡೆ
ಯನ್ನು ಕಟ್ಟಿದನು. 21ಹಕ್ಕೋಚನ ಮಗನಾದ ಊರೀ
ಯನ ಮಗನಾದ ಮೆರೇಮೋತನು ಎಲ್ಯಾಷೀಬನ ಮನೆ
ಮುಂದಿನ ಬಾಗಿಲಿನಿಂದ ಆ ಮನೆಯ ಕೊನೆಯತನಕ
ಗೋಡೆಯನ್ನು ಕಟ್ಟಿದನು. 22ಆ ಪ್ರಾಂತ್ಯದಲ್ಲಿ ವಾಸಿಸಿದ್ದ
ಯಾಜಕರು ಸೇರಿ ಮುಂದಿನ ಭಾಗವನ್ನು ಕಟ್ಟಿದರು.

23ಬೆನ್ಯಾಮೀನ್ ಮತ್ತು ಹಷ್ಷೂಬ್ ತಮ್ಮ ಸ್ವಂತ
ಮನೆಗಳ ಮುಂದಿದ್ದ ಭಾಗವನ್ನು ಕಟ್ಟಿದರು, ಹಾಗೆಯೇ
ಮಾಸೇಯನ ಮಗನಾದ ಅಜರ್ಯನು ತನ್ನ ಮನೇ
ಮುಂದಿದ್ದ ಗೋಡೆಯನ್ನು ಕಟ್ಟಿದನು. 24ಹೇನಾದಾದನ
ಮಗನಾದ ಬಿನ್ನೂಯ್ ಅಜರ್ಯನ ಮನೆಯಿಂದ
ಹಿಡಿದು ಮೂಲೆಯ ತನಕ ಗೋಡೆಯನ್ನು ಕಟ್ಟಿದನು.

25ಊಜೈಯ ಮಗನಾದ ಪಾಲಾಲನು ಮೂಲೆಯಿಂದ
ಹಿಡಿದು ರಾಜನ ಮೇಲ್ಮನೆಯ ಬುರುಜಿನ ತನಕ ಮುಂದು
ವರಿಸಿದನು. ಇದು ರಾಜನ ಕಾವಲುಪಡೆಯ ಅಂಗಳದ
ಸಮೀಪದಲ್ಲಿತ್ತು. ಪರೋಷನ ಮಗನಾದ ಪೆದಾಯನು
ಅಲ್ಲಿಂದಾಚೆಗೆ ಅಂದರೆ ಪಾಲಾಲನು ಕೊನೆಗೊಳಿಸಿದಾಚೆ
ನಿಂದ ಮುಂದುವರಿಸಿದನು. 26ಓಫೇಲ್ ಗುಡ್ಡದಲ್ಲಿ
ವಾಸಿಸುತ್ತಿದ್ದ ಆಲಯದ ಸೇವಕರು ಮುಂದಿನ ಭಾಗವನ್ನು
''ನೀರು'' ಎಂಬ ಬಾಗಿಲಿನ ಪೂರ್ವದ ಕಡೆಯವರೆಗೂ
ಆದರ ಬಳಿಯಿದ್ದ ಬುರುಜಿನವರೆಗೂ ರಿಪೇರಿ
ಮಾಡಿದರು.

27ತೆಕೋವದವರು ಉಳಿದ ಆ ಭಾಗವನ್ನು ಅಂದರೆ
ದೊಡ್ಡ ಬುರುಜಿನಿಂದ ಹಿಡಿದು ಓಫೇಲ್‌ಗೋಡೆಯ
ತನಕ ಮುಂದುವರಿಸಿದರು.

28ಯಾಜಕರು ಕುದುರೆಬಾಗಿಲಿನ ಮೇಲಿನ ಭಾಗ
ವನ್ನು ಕಟ್ಟಿದರು. ಪ್ರತಿಯೊಬ್ಬ ಯಾಜಕನು ತನ್ನ ಮನೆ
ಮುಂದಿದ್ದ ಭಾಗವನ್ನು ರಿಪೇರಿಮಾಡಿದನು. ಇಮ್ಮೇರನ
ಮಗನಾದ ಚಾದೋಕನು ತನ್ನ ಮನೆಯ ಮುಂದಿದ್ದ
ಗೋಡೆಯ ಭಾಗವನ್ನು ರಿಪೇರಿ ಮಾಡಿದನು. ಪೂರ್ವ
ಬಾಗಿಲಿನ ದ್ವಾರಪಾಲಕನಾಗಿರುವ ಶೆಕನ್ಯನ ಮಗನಾದ
ಶೆಮಾಯನು ಮುಂದಿನ ಭಾಗವನ್ನು ರಿಪೇರಿ
ಮಾಡಿದನು.

30ಶೆಲೆಮ್ಯನ ಮಗನಾದ ಹನನ್ಯನೂ ಮತ್ತು ಚಾಲಾಫನ
ಆರನೆಯ ಮಗನಾದ ಹಾನೂನನೂ ಉಳಿದ ಭಾಗವನ್ನು
ಮುಗಿಸಿದರು. ಬೆರೆಕ್ಯನ ಮಗನಾದ ಮೆಷುಲ್ಲಾಮ್ ತನ್ನ
ಮನೆಯ ಮುಂದಿದ್ದ ಭಾಗವನ್ನು ಕಟ್ಟಿದನು. 31ವರ್ತಕರ
ಮತ್ತು ಆಲಯದ ಸೇವಕರ ಮನೆಗಳ ತನಕದ ಭಾಗವನ್ನು
ಮಲ್ಕೀಯನು ರಿಪೇರಿ ಮಾಡಿದನು. ಇದು, ''ತನಿಕೆ''
ಎಂಬ ಬಾಗಿಲಿನ ಎದುರಿನಲ್ಲಿತ್ತು. ಮೂಲೆಗೋಡೆಯ
ಮೇಲಿರುವ ಕೋಣೆಯ ತನಕದ ಭಾಗವನ್ನು ಅಕ್ಕಸಾಲಿಗ
ನಾದ ಮಲ್ಕೀಯನು ರಿಪೇರಿ ಮಾಡಿದನು. 32ಅಕ್ಕಸಾಲಿ
ಗರು ಮತ್ತು ವರ್ತಕರು ಸೇರಿ ಗೋಡೆ ಮೇಲಿರುವ
ಕೋಣೆಯಿಂದ ಹಿಡಿದು, ''ಕುರಿ'' ಎಂಬ ಬಾಗಿಲಿನ
ತನಕದ ಗೋಡೆಯನ್ನು ಕಟ್ಟಿದರು.

### ಸನ್ಬಲ್ಲಟ್ ಮತ್ತು ಟೋಬೀಯ

4 ನಾವು ಜೆರುಸಲೇಮಿನ ಗೋಡೆ ಕಟ್ಟುತ್ತಿದ್ದೇವೆ
ಎಂಬುದನ್ನು ಕೇಳಿದ ಸನ್ಬಲ್ಲಟನು ಹೊಟ್ಟೆಕಿಚ್ಚಿನಿಂದ
ಕೋಪಗೊಂಡನು. ಅವನು ಯೆಹೂದ್ಯರನ್ನು ಹಾಸ್ಯ
ಮಾಡಿದನು. 2ಸಮಾರ್ಯದಲ್ಲಿರುವ ಅವನ ಸ್ನೇಹಿತ
ರೊಡನೆ ಮತ್ತು ಸಮಾರ್ಯದ ಸೈನ್ಯದವರೊಡನೆ ಮಾತ
ನಾಡಿ, ''ಈ ಬಲಹೀನ ಯೆಹೂದ್ಯರು ಮಾಡುತ್ತಿರುವು
ದೇನು? ನಾವು ಇವರನ್ನು ಹೀಗೆಯೇ ಬಿಟ್ಟುಬಿಡುತ್ತೇ

ವೆಂದು ತಿಳಿದುಕೊಂಡಿದ್ದಾರೆಯೇ? ತಾವು ಯಜ್ಞಗಳನ್ನು
ಅರ್ಪಿಸುವುದಾಗಿ ತಿಳಿದುಕೊಂಡಿರುವರೇ? ಒಂದೇ
ದಿನದಲ್ಲಿ ಕಟ್ಟಿಮುಗಿಸುವುದಾಗಿ ಅವರು ತಿಳಿದುಕೊಂಡಿರ
'ಬಹುದು. ಆ ತಿಪ್ಪೆಗುಂಡಿಯೊಳಗಿನ ಕಲ್ಲುಗಳ ರಾಶಿಗೆ
ಜೀವ ಕೊಡಲು ಅವರಿಗೆ ಸಾಧ್ಯವಿಲ್ಲ. ಅವು ಕೇವಲ ಬೂದಿ
ಮತ್ತು ಹೊಲಸುಗಳ ಗುಡ್ಡೆಗಳಾಗಿವೆ!'' ಎಂದು
ಹೇಳಿದನು.

3 ಅವನ ಜೊತೆಯಲ್ಲಿದ್ದ ಅಮ್ಮೋನಿಯನಾದ ಟೋಬೀ
ಯನು, ''ಈ ಯೆಹೂದ್ಯರು ಕಟ್ಟುತ್ತಿರುವುದೇನು? ಆ
ಗೋಡೆಯ ಮೇಲೆ ಒಂದು ನರಿ ಹಾರಿದರೂ
ಗೋಡೆಯು ಕುಸಿದುಬೀಳುವುದು'' ಎಂದು ವ್ಯಂಗ್ಯವಾಗಿ
ಹೇಳಿದನು.

4 ನೆಹೆಮೀಯನು ಯೆಹೋವನಿಗೆ ಪ್ರಾರ್ಥಿಸುತ್ತಾ
''ನಮ್ಮ ದೇವರೇ, ನಮ್ಮ ಪ್ರಾರ್ಥನೆಗೆ ಕಿವಿಗೊಡು ಆ
ಮನುಷ್ಯರು ನಮ್ಮನ್ನು ದ್ವೇಷಿಸುತ್ತಾರೆ. ಸನ್ಬಲ್ಲಟನು
ಮತ್ತು ಟೋಬೀಯನು ನಮ್ಮನ್ನು ಅವಮಾನ ಮಾಡು
ತ್ತಿದ್ದಾರೆ. ಆ ಕೇಡುಗಳು ಅವರಿಗೇ ಸಂಭವಿಸಲಿ. ಅವರು
ನಾಚಿಕೆಯಿಂದ ತಲೆತಗ್ಗಿಸಲಿ; ಸೆರೆಹಿಡಿಯಲ್ಪಟ್ಟವರಂತೆ
ಅವಮಾನ ಹೊಂದಲಿ. 5 ಅವರು ನಿನ್ನ ದೃಷ್ಟಿಯಲ್ಲಿ
ಮಾಡಿದ ಪಾಪಗಳನ್ನು ಮನ್ನಿಸಬೇಡ. ಅವರು ಗೋಡೆ
ಯನ್ನು ಕಟ್ಟುವ ನಿನ್ನ ದಾಸರನ್ನು ನಿಂದಿಸಿ ಅವರನ್ನು
ನಿರುತ್ಸಾಹಗೊಳಿಸಿದ್ದಾರೆ.''

6 ಜೆರುಸಲೇಮಿನ ಗೋಡೆಯನ್ನು ನಾವು ಕಟ್ಟಿ
ಮುಗಿಸಿದೆವು. ಪಟ್ಟಣದ ಸುತ್ತಲೂ ಪೌಳಿಗೋಡೆಯನ್ನು
ಕಟ್ಟಿದೆವು. ಆದರೆ ಅದರ ಎತ್ತರ ಇರಬೇಕಾದಷ್ಟು ಇರದೆ
ಅರ್ಧದ ತನಕ ಇದ್ದವು. ನಮ್ಮ ಜನರು ತಮ್ಮ ಹೃದಯ
ಪೂರ್ವಕವಾಗಿ ಕೆಲಸ ಮಾಡಿದ್ದುದರಿಂದ ನಮಗೆ
ಅಷ್ಟಾದರೂ ಮಾಡುವುದಕ್ಕೆ ಆಯಿತು.

7 ಸನ್ಬಲ್ಲಟನು, ಟೋಬೀಯನು, ಅರಬಿಯರು,
ಅಮ್ಮೋನಿಯರು ಮತ್ತು ಅಷ್ಡೋದಿನವರು ತುಂಬಾ
ಕೋಪಗೊಂಡಿದ್ದರು. ಯಾಕಂದರೆ ಜೆರುಸಲೇಮಿನ
ಗೋಡೆಯ ಕೆಲಸ ಮುಂದುವರಿಯುತ್ತಿದೆಯೆಂದೂ
ಮತ್ತು ಗೋಡೆಗಳ ಕಿಂಡಿಗಳನ್ನು ರಿಪೇರಿ ಮಾಡಲಾಗು
ತ್ತಿದೆಯೆಂದು ಅವರು ಕೇಳಿದ್ದರು. 8 ಅವರೆಲ್ಲಾ ಸೇರಿ
ಜೆರುಸಲೇಮಿಗೆ ವಿರುದ್ಧವಾಗಿ ಗಲಭೆ ಎಬ್ಬಿಸುವ ಹಂಚಿಕೆ
ಯನ್ನು ಹೂಡಿದರು; ಯುದ್ಧ ಮಾಡುವ ಯೋಚನೆ
ಮಾಡಿದರು. 9 ನಾವು ದೇವರಿಗೆ ಪ್ರಾರ್ಥಿಸಿದೆವು ಮತ್ತು
ನಮ್ಮ ಮೇಲೆ ಬೀಳಲು ಬರುವ ಶತ್ರುಗಳಿಗೆ ನಾವು
ತಯಾರಿರುವಂತೆ ಹಗಲು ರಾತ್ರಿ ಪಹರೆ ಮಾಡಲು
ಗೋಡೆಯ ಮೇಲೆ ಕಾವಲುಗಾರರನ್ನು ನೇಮಿಸಿದೆವು.

10 ಆ ಸಮಯದಲ್ಲಿ ಯೆಹೂದದ ಜನರು, ''ಕೆಲಸ
ಗಾರರು ಆಯಾಸಗೊಳ್ಳುತ್ತಿದ್ದಾರೆ; ದಾರಿಯಲ್ಲೆಲ್ಲಾ
ತುಂಬಾ ಧೂಳು ಮತ್ತು ಕಸ ಇರುವುದರಿಂದ ನಾವು
ಗೋಡೆಕಟ್ಟಡ ಕೆಲಸವನ್ನು ಮುಂದುವರಿಸಲು ಸಾಧ್ಯ
ವಿಲ್ಲ. 11 ಅಲ್ಲದೆ ನಮ್ಮ ವೈರಿಗಳು, 'ನಾವು ಅವರ ಮೇಲೆ
ಇದ್ದಕ್ಕಿದ್ದಂತೆ ಆಕ್ರಮಣ ಮಾಡುವುದರಿಂದ, ನಾವು ಅವರ
ಮಧ್ಯದಲ್ಲಿರುವ ತನಕ ಅವರಿಗೆ ಗೊತ್ತಾಗುವುದೂ ಇಲ್ಲ
ಕಾಣುವುದೂ ಇಲ್ಲ. ನಾವು ಅವರನ್ನು ಕೊಂದಾಗ ಕೆಲಸ
ತಾನಾಗಿಯೇ ನಿಂತುಹೋಗುವುದು' ಎಂದು ಹೇಳು
ತ್ತಿದ್ದಾರೆ''' 12 ಅನ್ಯಜನರ ಮಧ್ಯೆ ವಾಸಿಸುವ ಯೆಹೂದ್ಯರು
ನಮ್ಮ ಬಳಿಗೆ ಬಂದು ಹತ್ತುಬಾರಿ ನಮಗೆ ತಿಳಿಸಿದರು.
'ವೈರಿಗಳು ನಮ್ಮ ಸುತ್ತಮುತ್ತಲೂ ಇದ್ದಾರೆ. ನಾವು ಎತ್ತ
ತಿರುಗಿದರೂ ಅಲ್ಲಿ ಅವರಿದ್ದಾರೆ''' ಎಂದರು.

13 ಆದ್ದರಿಂದ ನಮ್ಮ ಜನರಲ್ಲಿ ಕೆಲವರನ್ನು ಕುಟಂಬ
ಸಮೇತವಾಗಿ ಖಡ್ಗ, ಬರ್ಜಿ ಮತ್ತು ಬಿಲ್ಲುಗಳೊಡನೆ
ಗೋಡೆಯ ಉದ್ದಕ್ಕೂ ಇದ್ದ ತಗ್ಗಾದ ಸ್ಥಳಗಳಲ್ಲಿಯೂ
ಗೋಡೆಗಳಲ್ಲಿದ್ದ ಕಿಂಡಿಗಳ ಬಳಿಯಲ್ಲಿಯೂ ಇರಿಸಿ
ದೆನು. 14 ನಮಗೆದುರಾಗಿ ಬಂದಿದ್ದ ಪರಿಸ್ಥಿತಿಯನ್ನು ನಾನು
ಚೆನ್ನಾಗಿ ಅವಲೋಕಿಸಿ ನಮ್ಮ ಜನರೊಂದಿಗೆ ಕುಟುಂಬ
ಕುಟುಂಬವಾಗಿ, ಅಧಿಕಾರಿಗಳಿಗೆ, ಮತ್ತು ಉಳಿದ ಜನರಿಗೆ
ಹೀಗೆ ಹೇಳಿದೆನು: ''ನಮ್ಮ ವೈರಿಗಳ ಬಗ್ಗೆ ನೀವು ಏನೂ
ಹೆದರಬೇಡಿರಿ. ನಮ್ಮ ದೇವರನ್ನು ನೆನಪು ಮಾಡಿರಿ.
ಯೆಹೋವನು ಬಲಶಾಲಿಯೂ ಸರ್ವಶಕ್ತನೂ
ಆಗಿದ್ದಾನೆ. ನೀವು ನಿಮ್ಮ ಸಹೋದರರಿಗಾಗಿ, ನಿಮ್ಮ
ಗಂಡುಹೆಣ್ಣುಮಕ್ಕಳಿಗಾಗಿ ನಿಮ್ಮ ನಿಮ್ಮ ಹೆಂಡತಿಯಂದಿರಿ
ಗಾಗಿ ಮತ್ತು ಮನೆಗಳಿಗಾಗಿ ಹೋರಾಡಿರಿ.''

15 ಅವರ ಕುತಂತ್ರವು ನಮಗೆ ಗೊತ್ತಾಯಿತೆಂದು
ವೈರಿಗಳಿಗೆ ತಿಳಿದಾಗ ದೇವರೇ ಅವರ ಯೋಜನೆಯನ್ನು
ನಿಷ್ಫಲಮಾಡಿದನೆಂದು ಅವರು ತಿಳಿದರು. ಮತ್ತೆ ನಾವೆಲ್ಲಾ
ಕಟ್ಟುವ ಕೆಲಸಕ್ಕೆ ಕೈಹಾಕಿದೆವು. ಅವರವರ ಭಾಗಕ್ಕೆ ಜನರು
ತೆರಳಿ ತಮ್ಮ ಕೆಲಸವನ್ನು ಪ್ರಾರಂಭಿಸಿದರು. 16 ಆ ದಿವಸ
ದಿಂದ ನನ್ನ ಜನರು ಅರ್ಧಭಾಗ ಗೋಡೆಯ ಕೆಲಸದಲ್ಲಿ
ನಿರತರಾದರು; ಉಳಿದ ಅರ್ಧ ಜನರು ಭರ್ಜಿಗಳನ್ನೂ
ಗುರಾಣಿಗಳನ್ನೂ ಬಿಲ್ಲುಗಳನ್ನೂ ಮತ್ತು ಆಯುಧ
ಗಳನ್ನೂ ಹಿಡಿದುಕೊಂಡು ಕಾವಲಾಗಿದ್ದರು; ಗೋಡೆ
ಯನ್ನು ಕಟ್ಟುತ್ತಿದ್ದ ಯೆಹೂದದ ಜನರ ಹಿಂಭಾಗದಲ್ಲಿ
ಸೈನ್ಯಾಧಿಕಾರಿಗಳು ನಿಂತುಕೊಂಡಿದ್ದರು. 17 ಗೋಡೆ ಕಟ್ಟು
ವವರೂ ಅವರ ಸಹಾಯಕರೂ ಒಂದು ಕೈಯಲ್ಲಿ
ಆಯುಧ ಹಿಡಿದುಕೊಂಡು ಇನ್ನೊಂದು ಕೈಯಲ್ಲಿ ಕೆಲಸ
ಮಾಡತ್ತಿದ್ದರು. 18 ಕೆಲಸಗಾರರು ತಮ್ಮ ಖಡ್ಗಗಳನ್ನು
ಸೊಂಟಕ್ಕೆ ಬಿಗಿದುಕೊಂಡೇ ಕೆಲಸ ಮಾಡಿದರು.
ಜನರನ್ನು ಎಚ್ಚರಗೊಳಿಸಲು ತುತ್ತೂರಿ ಊದುವವನು
ನನ್ನ ಬಳಿಯಲ್ಲಿಯೇ ನಿಂತಿರುತ್ತಿದ್ದನು. 19 ಆಗ ನಾನು
ಪ್ರಮುಖ ಕುಟುಂಬಗಳವರನ್ನೂ ಅಧಿಕಾರಿಗಳನ್ನೂ

ಮತ್ತು ಉಳಿದ ಜನರನ್ನೂ ಕರೆದು, ‘‘ನಾವು ಮಾಡುತ್ತಿರು
ವುದು ಬಹು ದೊಡ್ಡ ಕಾರ್ಯ; ಗೋಡೆಯ ಉದ್ದಕ್ಕೂ
ಚದರಿ ಒಬ್ಬರಿಗೊಬ್ಬರು ತುಂಬಾ ದೂರದಲ್ಲಿದ್ದೇವೆ.
[20]ತುತ್ತೂರಿಯ ಶಬ್ದ ಕೇಳಿದ ಕೂಡಲೇ ನೀವು ಅಲ್ಲಿಗೆ
ಹೋಗಬೇಕು. ನಾವೆಲ್ಲಾ ಆ ಸ್ಥಳದಲ್ಲಿ ಒಟ್ಟಾಗಿ ಸೇರ
ಬೇಕು. ನಮ್ಮ ದೇವರು ನಮಗಾಗಿ ಯುದ್ಧ
ಮಾಡುವನು’’ ಎಂದೆನು.

[21]ಹೀಗೆ ನಾವು ಗೋಡೆ ಕಟ್ಟುವ ಕಾರ್ಯವನ್ನು
ಮುಂದುವರಿಸಿದೆವು. ಅರ್ಧ ಜನರು ಭರ್ಜಿಗಳನ್ನು
ಹಿಡಿದುಕೊಂಡರು. ಮುಂಜಾನೆಯ ಸೂರ್ಯನ ಕಿರಣ
ಬೀಳುವ ಹೊತ್ತಿನಿಂದ ಹಿಡಿದು ರಾತ್ರಿ ನಕ್ಷತ್ರಗಳು
ಕಾಣುವ ತನಕ ನಾವು ಕೆಲಸದಲ್ಲಿ ನಿರತರಾಗಿರುತ್ತಿದ್ದೆವು.

[22]‘‘ಪ್ರತಿಯೊಬ್ಬ ಕೆಲಸಗಾರನೂ ಅವನ ಸಹಾಯಕನೂ
ಜೆರುಸಲೇಮಿನೊಳಗೇ ರಾತ್ರಿಯನ್ನು ಕಳೆಯಬೇಕು.
ರಾತ್ರಿಕಾಲದಲ್ಲಿ ಅವರು ಪಹರೆಯವರಾಗಿಯೂ ಹಗ
ಲಲ್ಲಿ ಗೋಡೆಕಟ್ಟುವವರಾಗಿಯೂ ಇರಬೇಕು’’ ಎಂದು
ನಾನು ಜನರಿಗೆ ಹೇಳಿದೆನು. [23]ಇದರಿಂದಾಗಿ ಯಾರೂ
ತಮ್ಮ ವಸ್ತ್ರಗಳನ್ನು ಬದಲಾಯಿಸಲಿಲ್ಲ. ನಾನಾಗಲೀ ನನ್ನ
ಬಂಧುಗಳಾಗಲೀ ನನ್ನ ಜನರಾಗಲೀ ಪಹರೆಯವ
ರಾಗಲೀ ವಸ್ತ್ರಗಳನ್ನು ಬದಲಾಯಿಸದೆ ಆಯುಧಗಳನ್ನು
ಧರಿಸಿಕೊಂಡೇ ಇದ್ದೆವು. ನೀರು ಕುಡಿಯುವಾಗಲೂ
ಆಯುಧ ಸನ್ನದ್ಧರಾಗಿರುತ್ತಿದ್ದೇವು.

### ಬಡಜನರಿಗೆ ನೆಹೆಮೀಯನ ಸಹಾಯ

5 ಯೆಹೂದ್ಯರಲ್ಲಿ ಎಷ್ಟೋ ಬಡ ಮಂದಿ ತಮ್ಮ
ಬಂಧುಗಳ ವಿಷಯದಲ್ಲಿ ದೂರು ಹೇಳಲಾ
ರಂಭಿಸಿದರು. [2]ಕೆಲವರು ಹೀಗಂದರು; ‘‘ನಮ್ಮ ಮನೆ
ಯಲ್ಲಿ ಬಹಳ ಮಕ್ಕಳಿದ್ದಾರೆ. ನಮಗೆ ಊಟಮಾಡಲೂ
ಸಾಕಷ್ಟು ದವಸಧಾನ್ಯವಿಲ್ಲ; ಹೀಗಿರಲು ನಾವು ಜೀವಂತ
ವಾಗಿ ಉಳಿಯುವ ಸಾಧ್ಯತೆಯಿಲ್ಲ.’’

[3]ಇನ್ನು ಕೆಲವರು, ‘‘ನಮಗೀಗ ಬರಗಾಲ ಪ್ರಾಪ್ತಿ
ಯಾಗಿದೆ. ನಮಗೆ ದವಸಧಾನ್ಯ ಕೊಂಡುಕೊಳ್ಳಲು ನಮ್ಮ
ಹೊಲಗದ್ದೆಗಳನ್ನು ಮಾರಬೇಕಾಗುತ್ತದೆ’’ ಅಂದರು.

[4]ಇನ್ನೂ ಕೆಲವರು, ‘‘ನಮ್ಮ ಹೊಲಗದ್ದೆಗಳ ಮೇಲೆ
ಅರಸನಿಗೆ ತೆರಿಗೆ ಕೊಡಬೇಕಾಗಿದೆ. ಆದರೆ ಕೊಡಲು
ನಮ್ಮಲ್ಲಿ ಏನೂ ಇಲ್ಲ. ಬೇರೆಯವರಿಂದ ಎರವಲು
ಪಡೆದುಕೊಂಡು ಕೊಡಬೇಕಾಗಿದೆ’’ ಅಂದರು. [5]‘‘ಆ
ಧನಿಕರನ್ನು ನೋಡಿರಿ. ನಾವೂ ಅವರಂತೆಯೇ ಇದ್ದೇವೆ.
ನಮ್ಮ ಮಕ್ಕಳು ಅವರ ಮಕ್ಕಳಂತೆಯೇ ಇದ್ದಾರೆ. ಆದರೆ
ನಾವು ಮಾತ್ರ ನಮ್ಮ ಗಂಡು ಹೆಣ್ಣು ಮಕ್ಕಳನ್ನು ಗುಲಾಮ
ರಾಗಿ ಮಾರುವ ಸ್ಥಿತಿಯಲ್ಲಿದ್ದೇವೆ. ನಮ್ಮಲ್ಲಿ ಕೆಲವರು
ಆಗಲೇ ತಮ್ಮ ಹೆಣ್ಣು ಮಕ್ಕಳನ್ನು ಗುಲಾಮರನ್ನಾಗಿ ಮಾರಿ
ದ್ದಾರೆ. ನಮಗೆ ಬೇರೆ ಮಾರ್ಗವೇ ಇಲ್ಲ. ನಮ್ಮ ಹೊಲ
ಗದ್ದೆಗಳನ್ನು ಯಾವಾಗಲೋ ಕಳೆದುಕೊಂಡಿದ್ದೇವೆ.’’

[6]ನಾನು ಅವರ ದೂರುಗಳನ್ನು ಕೇಳಿಸಿಕೊಂಡಾಗ
ಬಹಳವಾಗಿ ಸಿಟ್ಟುಗೊಂಡೆನು. [7]ನನ್ನ ಕೋಪವು ಶಾಂತ
ವಾದ ಬಳಿಕ ಧನಿಕರ ಮತ್ತು ಅಧಿಕಾರಿಗಳ ಬಳಿಗೆ ಹೋಗಿ,
‘‘ನೀವು ನಿಮ್ಮ ಸ್ವಂತ ಜನರಿಗೆ ಕೊಟ್ಟಿರುವ ಸಾಲಕ್ಕೆ
ಬಡ್ಡಿಯನ್ನು ಕೊಡಲು ಬಲವಂತ ಮಾಡುತ್ತಿದ್ದೀರಿ. ನೀವು
ಕೂಡಲೇ ಅದನ್ನು ನಿಲ್ಲಿಸಬೇಕು’’ ಎಂದೆನು. ಅನಂತರ
ನಾನು ಎಲ್ಲಾ ಜನರನ್ನು ಒಟ್ಟುಗೂಡಿಸಿ, [8]‘‘ನಮ್ಮ
ಯೆಹೂದಿ ಜನರನ್ನು ಪರದೇಶಗಳಲ್ಲಿ ಗುಲಾಮರನ್ನಾಗಿ
ಮಾರಿದ್ದರು. ಅಂಥವರನ್ನು ನಾವು ಕ್ರಯಕೊಟ್ಟು
ಕೊಂಡುಕೊಂಡು ಅವರನ್ನು ಗುಲಾಮತನದಿಂದ ಬಿಡು
ಗಡೆ ಮಾಡಿಸಿದೆವು. ಆದರೆ ನೀವು ಈಗ ಮತ್ತೆ ಗುಲಾಮರ
ನ್ನಾಗಿ ಮಾಡುತ್ತಿದ್ದೀರಿ.’’ ಸೇರಿಬಂದಿದ್ದ ಶ್ರೀಮಂತರೂ
ಅಧಿಕಾರಿಗಳೂ ಸುಮ್ಮನೆ ಬಾಯಿ ಮುಚ್ಚಿಕೊಂಡರು.
ಅವರಿಗೆ ಏನೂ ಹೇಳಲಿಕ್ಕೂ ಆಗಲಿಲ್ಲ. [9]ನಾನು ಹೇಳು
ವುದನ್ನು ಮುಂದುವರಿಸುತ್ತಾ, ‘‘ನೀವು ತಪ್ಪು ಕೆಲಸ
ಮಾಡುತ್ತಿದ್ದಿರಿ. ದೇವರಿಗೆ ಭಯಪಟ್ಟು ಆತನನ್ನು
ಗೌರವಿಸಬೇಕೆಂದು ನಿಮಗೆ ಗೊತ್ತಿದೆ. ಇತರ ಜನರು
ಮಾಡುವ ನಾಚಿಕೆಕರವಾದ ಕೆಲಸವನ್ನು ನೀವು ಮಾಡ
ಬಾರದು. [10]ನನ್ನ ಜನರು, ನನ್ನ ಬಂಧುಗಳು ಮತ್ತು ನಾನು
ಹಣವನ್ನು ದವಸಧಾನ್ಯಗಳನ್ನು ಎರವಲಾಗಿ ಕೊಡುತ್ತೇವೆ.
ಆದರೆ ಅವರಿಂದ ಬಡ್ಡಿಯನ್ನು ವಸೂಲು ಮಾಡುವುದಿಲ್ಲ.
ಸಾಲ ಪಡೆದುಕೊಂಡವರಿಂದ ಬಡ್ಡಿಯನ್ನು ಬಲವಂತ
ದಿಂದ ವಸೂಲು ಮಾಡುವುದನ್ನು ನಾವು ನಿಲ್ಲಿಸಬೇಕು.
[11]ಅವರಿಂದ ಕಿತ್ತುಕೊಂಡ ಹೊಲಗದ್ದೆಗಳನ್ನು, ದ್ರಾಕ್ಷಾ
ತೋಟ, ಎಣ್ಣೆಮರಗಳ ತೋಟ ಮತ್ತು ಅವರ
ಮನೆಗಳನ್ನು ಅವರಿಗೆ ಈಗಲೇ ಹಿಂದಕ್ಕೆ ಕೊಡಿರಿ.
ಅವರಿಂದ ವಸೂಲಿ ಮಾಡಿದ ಬಡ್ಡಿಯನ್ನು ಹಿಂದಕ್ಕೆ
ಕೊಡಿರಿ. ನೀವು ಯಾವ ಯಾವದಕ್ಕೆ ಬಡ್ಡಿ ವಸೂಲಿ
ಮಾಡಿರುವಿರೋ ಎಲ್ಲವನ್ನು ಹಿಂದಕ್ಕೆ ಕೊಡಿರಿ’’ ಎಂದು
ಹೇಳಿದೆನು. [12]ಆಗ ಶ್ರೀಮಂತರೂ ಅಧಿಕಾರಿಗಳೂ,
‘‘ನಾವು ಹಿಂದಕ್ಕೆ ಕೊಡುತ್ತೇವೆ. ಅವರಿಂದ ನಾವು
ಹೆಚ್ಚೇನೂ ಕೇಳುವುದಿಲ್ಲ. ನೆಹೆಮೀಯನೇ, ನೀನು
ಹೇಳಿದಂತೆಯೇ ನಾವು ಮಾಡುತ್ತೇವೆ’’ ಎಂದರು. ಆಗ
ನಾನು ದೇವರ ಮುಂದೆ ಅವರಿಂದ ಪ್ರತಿಜ್ಞೆ ಮಾಡಿಸಲು
ಯಾಜಕರನ್ನು ಕರೆದೆನು.

[13]ನಂತರ ನಾನು ನನ್ನ ಉಡುಪಿನ ನೆರಿಗೆಯನ್ನು
ಝಾಡಿಸಿ, ‘‘ತಾನು ಮಾಡಿದ ಪ್ರತಿಜ್ಞೆಯಂತೆ ನಡೆಯದ
ವನನ್ನು ದೇವರು ಅವರ ಮನೆಗಳಿಂದ ಝಾಡಿಸಿಬಿಡಲಿ;
ಅವರು ತಾವು ಗಳಿಸಿದ್ದೆಲ್ಲವನ್ನು ಕಳೆದುಕೊಳ್ಳಲಿ’’ ಎಂದು
ಹೇಳಿದಾಗ ಜನರೆಲ್ಲರೂ ‘ಆಮೆನ್’ ಅಂದರು;

ಯೆಹೋವನನ್ನು ಸ್ತುತಿಸಿದರು. ತಾವು ಮಾಡಿದ ಪ್ರತಿಜ್ಞೆ
ಯಂತೆ ನಡೆದುಕೊಂಡರು.
14ಯೆಹೂದ ಪ್ರಾಂತ್ಯಕ್ಕೆ ನನ್ನನ್ನು ರಾಜ್ಯಪಾಲನಾಗಿ
ನೇಮಿಸಿದಂದಿನಿಂದ, ನಾನಾಗಲೀ ನನ್ನ ಸಹೋದರ
ರಾಗಲೀ ರಾಜ್ಯಪಾಲರಿಗಾಗಿ ಪ್ರತ್ಯೇಕಿಸಿದ ಆಹಾರವನ್ನು
ತಿನ್ನಲಿಲ್ಲ; ನನಗಾಗಿ ಆಹಾರವನ್ನು ಕೊಂಡುಕೊಳ್ಳಲು
ಜನರಿಂದ ತೆರಿಗೆ ವಸೂಲಿಮಾಡಲಿಲ್ಲ. ಅರ್ತಷಸ್ತನ
ಆಳ್ವಿಕೆಯ ಇಪ್ಪತ್ತನೆಯ ವರ್ಷದಿಂದ ಮೂವತ್ತೆರಡನೆ
ವರ್ಷದ ತನಕ ನಾನು ರಾಜ್ಯಪಾಲನಾಗಿದ್ದೆನು. ಹೀಗೆ
ಹನ್ನೆರಡು ವರ್ಷ ಯೆಹೂದದ ರಾಜ್ಯಪಾಲನಾಗಿದ್ದೆನು.
15ನನಗಿಂತ ಮೊದಲು ರಾಜ್ಯಪಾಲರಾಗಿದ್ದವರು ಜನ
ರನ್ನು ತುಂಬಾ ಕಷ್ಟಕ್ಕೆ ಒಳಪಡಿಸಿದ್ದರು. ಪ್ರತಿಯೊಬ್ಬರು
ಒಂದು ಪೌಂಡ್ ಬೆಳ್ಳಿಯನ್ನೂ ಆಹಾರವನ್ನೂ ದ್ರಾಕ್ಷಾ
ರಸವನ್ನೂ ಕೊಡಬೇಕಿತ್ತು. ಆ ರಾಜ್ಯಪಾಲರ ಅಧಿಕಾರಿ
ಗಳು ಸಹ ಜನರ ಮೇಲೆ ದೊರೆತನ ನಡೆಸಿ ಅವರ ಜೀವನ
ವನ್ನು ಮತ್ತಷ್ಟು ಕಠಿಣಗೊಳಿಸಿದರು. ಆದರೆ ದೇವರಲ್ಲಿ
ಭಯಭಕ್ತಿ ಇದ್ದುದರಿಂದ ನಾನು ಆ ರೀತಿ ಮಾಡಲಿಲ್ಲ.
16ಜೆರುಸಲೇಮಿನ ಗೋಡೆ ಕಟ್ಟುವ ಕೆಲಸದಲ್ಲಿ ನಾನು
ತುಂಬಾ ಪ್ರಯಾಸಪಟ್ಟೆನು. ಗೋಡೆಯ ನಿರ್ಮಾಣ ಕೆಲಸ
ಕ್ಕಾಗಿ ನನ್ನ ಜನರೆಲ್ಲರೂ ಒಟ್ಟಾಗಿ ಸೇರಿದರು. ನಾವು
ಯಾರಿಂದಲೂ ಭೂಮಿಯನ್ನು ಕಿತ್ತುಕೊಳ್ಳಲಿಲ್ಲ.
17ಇಷ್ಟೇ ಅಲ್ಲದೆ ಯಾವಾಗಲೂ ನೂರೈವತ್ತು ಮಂದಿ
ಯೆಹೂದ್ಯರಿಗೆ ನನ್ನ ಮೇಜಿನ ಮೇಲೆ ಊಟಕ್ಕೆ ಬಡಿಸು
ತ್ತಿದ್ದೆನು. ನಮ್ಮ ಸುತ್ತಲಿನ ಪ್ರಾಂತ್ಯಗಳಿಂದ ಬಂದ ಜನರೂ
ನಮ್ಮೊಂದಿಗೆ ಊಟ ಮಾಡುತ್ತಿದ್ದರು. 18ಪ್ರತಿದಿನ ನಮ್ಮ
ಊಟಕ್ಕಾಗಿ ಒಂದು ಹೋರಿಯನ್ನು, ಆರು ಕೊಬ್ಬಿದ
ಕುರಿಗಳನ್ನು, ಮತ್ತು ಅನೇಕ ಕೋಳಿಗಳನ್ನು ಕೊಯ್ಯ
ಲಾಗುತ್ತಿತ್ತು; ಹತ್ತುದಿನಕ್ಕೊಮ್ಮೆ ವಿವಿಧ ರೀತಿಯ ದ್ರಾಕ್ಷಾ
ರಸವನ್ನು ಒದಗಿಸಿಕೊಡುತ್ತಿದ್ದೆನು. ಆದರೂ ರಾಜ್ಯಪಾಲ
ನಿಗೆ ಸಲ್ಲಬೇಕಾಗಿದ್ದ ಆಹಾರ ಪದಾರ್ಥಗಳನ್ನು
ನಾನೆಂದೂ ಕೇಳಲಿಲ್ಲ; ಅದಕ್ಕಾಗಿ ಜನರಿಂದ ತೆರಿಗೆ
ತೆಗೆದುಕೊಳ್ಳಲಿಲ್ಲ. ಯಾಕಂದರೆ ನನ್ನ ಜನರು ಮಾಡುವ
ಕೆಲಸವು ತುಂಬಾ ಪ್ರಯಾಸಕರವಾದದ್ದೆಂದು ನನಗೆ
ಗೊತ್ತಿತ್ತು. 19ದೇವರೇ, ನಾನು ಈ ಜನರಿಗಾಗಿ
ಮಾಡಿರುವ ಒಳ್ಳೆಯದನ್ನೆಲ್ಲಾ ಜ್ಞಾಪಿಸಿಕೊ.

## ವಿರೋಧಿಗಳ ಕುಯುಕ್ತಿ

6 ಸನ್ಬಲ್ಲಟನಿಗೆ, ಟೋಬೀಯನಿಗೆ ಮತ್ತು ಅರಬಿಯವ
ನಾದ ಗೆಷೆಮನಿಗೆ ಮತ್ತು ಇನ್ನಿತರ ವೈರಿಗಳಿಗೆ ನಾವು
ಗೋಡೆಯನ್ನು ಕಟ್ಟಿ ಮುಗಿಸಿದ್ದು ಗೊತ್ತಾಯಿತು. ಗೋಡೆ
ಯಲ್ಲಿದ್ದ ಎಲ್ಲಾ ಕಿಂಡಿಗಳನ್ನು ನಾವು ಮುಚ್ಚಿದೆವು. ಆದರೆ
ಗೋಡೆಯಲ್ಲಿನ ದ್ವಾರಗಳಿಗೆ ಇನ್ನೂ ಬಾಗಿಲುಗಳನ್ನು
ಇಟ್ಟಿರಲಿಲ್ಲ. 2ಸನ್ಬಲ್ಲಟನು ಮತ್ತು ಗೆಷೆಮನು ನನಗೆ
ಒಂದು ಸಂದೇಶವನ್ನು ಕಳುಹಿಸಿ, ‘‘ನೆಹೆಮೀಯನೇ,
ನಾವು ಓನೋ ಬಯಲಿನಲ್ಲಿರುವ ಹಕ್ಕೆಫಿರೀಮ್ ಎಂಬ
ಪಟ್ಟಣದಲ್ಲಿ ಭೇಟಿಯಾಗೋಣ’’ ಎಂದು ಬರೆದಿದ್ದರು.
ಓನೋ ಬಯಲಿನಲ್ಲಿ ನನಗೆ ಅವರು ಕೇಡು ಮಾಡ
ಬೇಕೆಂದಿದ್ದರು.
3ನಾನು ಅವರಿಗೆ ಸೇವಕರ ಮುಖಾಂತರ ಈ ಉತ್ತರ
ವನ್ನು ಕಳುಹಿಸಿದೆನು: ‘‘ನಾನು ಬಹಳ ವಿಶೇಷವಾದ ಕೆಲಸ
ಮಾಡಿಸುತ್ತಿದ್ದೇನೆ. ಆದುದರಿಂದ ನನಗೆ ಬರಲು ಸಾಧ್ಯ
ವಿಲ್ಲ. ನನ್ನ ಬರುವಿಕೆಯಿಂದಾಗಿ ಈ ಕೆಲಸವು ನಿಂತು
ಹೋಗಬಾರದು.’’
4ಸನ್ಬಲ್ಲಟನೂ ಗೆಷೆಮನೂ ಅದೇ ಸಂದೇಶವನ್ನು
ನಾಲ್ಕು ಸಲ ಕಳುಹಿಸಿದರು. ಪ್ರತಿ ಸಾರಿಯೂ ಅದೇ
ಉತ್ತರವನ್ನು ನಾನು ಅವರಿಗೆ ಕಳುಹಿಸಿದೆನು. 5ಐದನೆಯ
ಸಾರಿ ಸನ್ಬಲ್ಲಟನು ತನ್ನ ಸೇವಕನೊಂದಿಗೆ ಮುದ್ರೆಯಿಂದ
ಮುಚ್ಚಲ್ಪಡದ ಪತ್ರವನ್ನು ಕಳುಹಿಸಿಕೊಟ್ಟನು. 6ಅದರಲ್ಲಿ,
‘‘ಒಂದು ಸುದ್ದಿಯು ಹರಡುತ್ತಲಿದೆ. ಎಲ್ಲಾ ಕಡೆಗಳಲ್ಲಿ
ಜನರು ಅದರ ವಿಷಯವಾಗಿ ಮಾತಾಡುತ್ತಿದ್ದಾರೆ. ಆ
ಸುದ್ದಿಯು ಸತ್ಯವೆಂದು ಗೆಷೆಮನು ನನಗೆ ಹೇಳಿದನು.
ನೀನು ಮತ್ತು ಯೆಹೂದ್ಯರು ಅರಸನಿಗೆ ವಿರುದ್ಧವಾಗಿ
ದಂಗೆ ಏಳಲು ಯೋಚಿಸುತ್ತಿದ್ದೀರೆಂಬ ವದಂತಿ ಇದೆ. ಅದ
ಕ್ಕೋಸ್ಕರವಾಗಿಯೇ ನೀವು ಕೋಟೆಗೋಡೆಯನ್ನು
ಕಟ್ಟುತ್ತಿದ್ದೀರಿ. ನೀನು ಯೆಹೂದ್ಯರ ಅರಸನಾಗುವೆ
ಎಂದೂ ಜನರಲ್ಲಿ ಸುದ್ದಿ ಹಬ್ಬಿದೆ.
7ಮಾತ್ರವಲ್ಲದೆ ನಿನ್ನನ್ನು ಯೆಹೂದ ಪ್ರಾಂತ್ಯದ ಅರಸ
ನೆಂದು ಪ್ರಕಟಿಸಲಿಕ್ಕೆ ಪ್ರವಾದಿಗಳನ್ನು ಆರಿಸಿಕೊಂಡಿರುವೆ
ಎಂಬ ಸುದ್ದಿಯೂ ಇದೆ. ರಾಜನಾದ ಅರ್ತಷಸ್ತನು ಇದರ
ಬಗ್ಗೆ ಕೇಳುವುದಕ್ಕಿಂತ ಮೊದಲೇ ನಾವು ಕುಳಿತುಕೊಂಡು
ಮಾತನಾಡೋಣ.’’
8ನಾನು ಆ ಕಾಗದವನ್ನು ಹಾಗೆಯೇ ಹಿಂದಕ್ಕೆ ಕಳುಹಿ
ಸಿದೆನು. ಅಲ್ಲದೆ, ‘‘ನೀನು ಹೇಳುವಂಥದ್ದೇನೂ ಆಗ
ಲಿಲ್ಲ. ಇದು ಕೇವಲ ನಿನ್ನ ಊಹೆಯಷ್ಟೇ!’’ ಎಂದು ಹೇಳಿ
ಕಳುಹಿಸಿದೆನು.
9ನಾವು ಹೆದರಿಹೋಗಬೇಕೆಂದು ನಮ್ಮ ವೈರಿಗಳ
ಕುತಂತ್ರವಿದೆ. ‘‘ಯೆಹೂದ್ಯರು ಭಯಗೊಂಡು ಬಲ
ಹೀನರಾಗುವುದರಿಂದ ಅವರ ಕೆಲಸವನ್ನು ಮುಂದುವರಿ
ಸಲು ಆಗುವುದಿಲ್ಲ, ಗೋಡೆಯೂ ಪೂರ್ಣಗೊಳ್ಳುವು
ದಿಲ್ಲ’’ ಎಂದು ಅವರು ಯೋಚಿಸಿಕೊಂಡಿದ್ದಾರೆ. ಆದರೆ
ನಾನು, ‘‘ದೇವರೇ, ನನ್ನನ್ನು ಬಲಗೊಳಿಸು’’ ಎಂದು
ಪ್ರಾರ್ಥಿಸಿದೆನು.
10ಒಂದು ದಿನ ನಾನು ದೆಲಾಯನ ಮಗನಾದ
ಶೆಮಾಯನ ಮನೆಗೆ ಹೋದೆನು. ದೆಲಾಯನು

ಮೆಹೇಟಬೇಲನ ಮಗ. ಆಗ ಶೆಮಾಯನು ಮನೆ
ಯಲ್ಲಿದ್ದನು. ಅವನು,

‘‘ನೆಹೆಮೀಯನೇ, ನಾವು ದೇವಾಲಯದಲ್ಲಿ
ಭೇಟಿಯಾಗೋಣ. ನಾವು ಅದರ ಒಳಗೆ ಹೋಗಿ
ಕದಗಳನ್ನು ಮುಚ್ಚಿಕೊಳ್ಳೋಣ? ಯಾಕಂದರೆ
ನಿನ್ನನ್ನು ಕೊಲ್ಲಲು ಈ ರಾತ್ರಿ ಜನರು ಬರುತ್ತಾರೆ’’
ಎಂದು ಹೇಳಿದನು.

11ಆದರೆ ನಾನು ಶೆಮಾಯನಿಗೆ, ‘‘ನನ್ನಂಥ ಪುರುಷನು
ಓಡಿಹೋಗಬೇಕೇ? ನನ್ನಂಥ ಸಾಮಾನ್ಯ ವ್ಯಕ್ತಿ ದೇವಾಲ
ಯಕ್ಕೆ ಹೋಗಿ ಅವಿತುಕೊಳ್ಳಬಾರದು. ನಾನು ಬರುವು
ದಿಲ್ಲ’’ ಎಂದು ಹೇಳಿದೆನು.
12ಶೆಮಾಯನನನ್ನು ದೇವರು ಕಳುಹಿಸಿಲ್ಲವೆಂದು
ನನಗೆ ಚೆನ್ನಾಗಿ ಗೊತ್ತಿತ್ತು. ಟೋಬೀಯ ಮತ್ತು ಸನ್ಬಲ್ಲಟ
ಅವನಿಗೆ ಲಂಚ ಕೊಟ್ಟು ಹಾಗೆ ಹೇಳಿಸಿದ್ದರು. 13ನಾನು
ಭಯಗೊಂಡು ದೇವಾಲಯದೊಳಗೆ ಓಡಿಹೋಗಿ
ದೋಷಿಯಾಗುವಂತೆಯೂ ನನ್ನ ಮೇಲೆ ಹಾಗೆ ಅಪರಾಧ
ಹೊರಿಸಲು ತಮಗೆ ಕಾರಣ ದೊರೆಯುವಂತೆಯೂ
ಅವರು ಶೆಮಾಯನನ್ನು ಉಪಯೋಗಿಸಿಕೊಂಡರು.
14ದೇವರೇ, ಟೋಬೀಯ ಮತ್ತ ಸನ್ಬಲ್ಲಟನ ವಿಚಾರ
ವಾಗಿ ನಿನ್ನ ಜ್ಞಾಪಕದಲ್ಲಿರಿಸು. ಅವರು ಮಾಡಿದ ಕೆಟ್ಟ
ಕಾರ್ಯಗಳನ್ನು ನೆನಪಿನಲ್ಲಿಡು. ಅದೇ ಸಮಯದಲ್ಲಿ
ಪ್ರವಾದಿನಿಯಾದ ನೋವದ್ಯಳನ್ನು, ಇತರ ಪ್ರವಾದಿ
ಗಳನ್ನು, ನನ್ನನ್ನು ಹೆದರಿಸುವವರನ್ನು ನೆನಪು ಮಾಡಿಕೊ.

### ಗೋಡೆಯ ಕೆಲಸ ಮುಕ್ತಾಯವಾಯಿತು

15ಎಲೂಲ್ ತಿಂಗಳ ಇಪ್ಪತ್ತೈದನೆಯ ದಿನದಲ್ಲಿ ಜೆರುಸ
ಲೇಮಿನ ಪೌಳಿಗೋಡೆಗಳ ಕೆಲಸ ಮುಕ್ತಾಯವಾಯತು.
ಅದಕ್ಕೆ ಒಟ್ಟು ಐವತ್ತೆರಡು ದಿನಗಳು ಬೇಕಾದವು. 16ನಮ್ಮ
ವೈರಿಗಳೆಲ್ಲಾ ಕೆಲಸ ಸಂಪೂರ್ಣವಾದದ್ದನ್ನು ಕೇಳಿದರು.
ನಮ್ಮ ಸುತ್ತುಮುತ್ತಲಿನ ಪ್ರಾಂತ್ಯಗಳವರಿಗೂ ದೇಶಗಳ
ವರಿಗೂ ಈ ಸುದ್ದಿ ಮುಟ್ಟಿತು. ಆಗ ಅವರ ಧೈರ್ಯವು
ಕುಗ್ಗಿತು. ಯಾಕೆಂದರೆ ಈ ಮಹಾ ಕಾರ್ಯವನ್ನು ನಮ್ಮ
ದೇವರ ಸಹಾಯದಿಂದಲೇ ನಾವು ಮಾಡಿದ್ದೇವೆಂದು
ಅವರಿಗೆ ಅರ್ಥವಾಯಿತು.
17ಅದೇ ಸಮಯದಲ್ಲಿ ಗೋಡೆಯ ಕೆಲಸ ಮುಗಿದ
ಬಳಿಕ ಯೆಹೂದ ಪ್ರಾಂತ್ಯದ ಧನಿಕರು ಟೋಬೀಯನಿಗೆ
ಆಗಾಗ್ಗೆ ಅನೇಕ ಪತ್ರ ಬರೆಯುತ್ತಿದ್ದರು. 18ಟೋಬೀ
ಯನೂ ಅವರಿಗೆ ಉತ್ತರಿಸುತ್ತಿದ್ದನು. ಅವರು ಆ ಪತ್ರ
ಗಳನ್ನು ಕಳುಹಿಸಲು ಕಾರಣವೇನಂದರೆ ಯೆಹೂದ್ಯರಲ್ಲಿ
ಅನೇಕ ಜನರು ಅವನಿಗೆ ನಂಬಿಗಸ್ತರಾಗಿರುವುದಾಗಿ
ವಾಗ್ದಾನ ಮಾಡಿದ್ದರು. ಟೋಬೀಯನು ಆರಹನ
ಮಗನಾದ ಶೆಕನ್ಯನ ಅಳಿಯನಾಗಿದ್ದುದೇ ಇದಕ್ಕೆ ಕಾರಣ.
ಟೋಬೀಯನ ಮಗನಾದ ಯೆಹೋಹಾನಾನನು
ಬೆರೆಕ್ಯನ ಮಗನಾದ ಮೆಷುಲ್ಲಾಮನ ಮಗಳೊಂದಿಗೆ
ಲಗ್ನವಾಗಿದ್ದನು.
19ಹಿಂದಿನ ಕಾಲದಲ್ಲಿ ಆ ಜನರು ಟೋಬೀಯನಿಗೆ
ಒಂದು ವಿಶೇಷ ವಾಗ್ದಾನ ಮಾಡಿದ್ದರು. ಆದ್ದರಿಂದ
ಟೋಬೀಯನು ಎಷ್ಟು ಒಳ್ಳೆಯವನೆಂದು ನನ್ನೊಂದಿಗೆ
ಹೇಳುತ್ತಿದ್ದರು; ನಾನು ಮಾಡುತ್ತಿರುವ ಕಾರ್ಯಗಳ
ಬಗ್ಗೆಯೂ ಅವರು ಟೋಬೀಯನಿಗೆ ವರದಿ ಮಾಡುತ್ತಿ
ದ್ದರು. ಟೋಬೀಯನು ನನ್ನನ್ನು ಬೆದರಿಸುವುದ
ಕ್ಕೋಸ್ಕರ ನನಗೆ ಪದೇ ಪದೇ ಪತ್ರ ಬರೆಯುತ್ತಿದ್ದನು.
7 ಗೋಡೆಯ ಕೆಲಸ ಪೂರ್ತಿಯಾದ ಬಳಿಕ ದ್ವಾರ
ಗಳಿಗೆ ಬಾಗಿಲುಗಳನ್ನು ಇಡಲು ಪ್ರಾರಂಭಿಸಿದೆವು.
ಮತ್ತು ಬಾಗಿಲುಗಳಿಗೆ ಕಾವಲುಗಾರರನ್ನು ನೇಮಿಸಿದೆವು.
ದೇವಾಲಯದಲ್ಲಿ ಬೇಕಾಗಿರುವ ಗಾಯಕರನ್ನು ಮತ್ತು
ಯಾಜಕರಿಗೆ ಬೇಕಾದ ಸಹಾಯಕರನ್ನು ಆರಿಸಿದೆವು.
2ಇದಾದ ಬಳಿಕ ನನ್ನ ಸಹೋದರ ಹನಾನಿಯನನ್ನು
ಜೆರುಸಲೇಮಿನ ಆಡಳಿತಗಾರನನ್ನಾಗಿ ನೇಮಿಸಿದೆನು.
ಹನನ್ಯನನ್ನು ಜೆರುಸಲೇಮಿನ ಕೋಟೆಗೆ ಅಧಿಪತಿಯ
ನ್ನಾಗಿ ಆರಿಸಿದೆನು. ಹನಾನಿಯು ನಂಬಿಗಸ್ತನೂ ದೇವರಿಗೆ
ಭಯಪಡುವವನೂ ಆಗಿದ್ದುದರಿಂದ ನಾನು ಅವನನ್ನು
ಆರಿಸಿಕೊಂಡೆನು. 3ಹನಾನಿಗೆ ಮತ್ತು ಹನನ್ಯನಿಗೆ ನಾನು
ಆಜ್ಞಾಪಿಸಿದ್ದೇನೆಂದರೆ: ‘‘ಸೂರ್ಯೋದಯವಾಗಿ ಕೆಲವು
ತಾಸು ಕಳೆದ ಮೇಲೆಯೇ ನೀವು ಜೆರುಸಲೇಮಿನ
ಬಾಗಿಲುಗಳನ್ನು ತೆರೆಯಬೇಕು; ಸೂರ್ಯನು ಮುಳು
ಗುವ ಮೊದಲೇ ನೀವು ಬಾಗಿಲುಗಳನ್ನು ಮುಚ್ಚಿ ಬೀಗ
ಹಾಕಬೇಕು. ಜೆರುಸಲೇಮಿನಲ್ಲಿ ವಾಸವಾಗಿರುವವರನ್ನೇ
ಕಾವಲುಗಾರರನ್ನಾಗಿ ಆರಿಸಿಕೊಳ್ಳಿರಿ. ವಿಶೇಷವಾದ
ಸ್ಥಳಗಳಲ್ಲಿ ಪಟ್ಟಣವನ್ನು ಕಾಯುವುದಕ್ಕಾಗಿ ಅವರಲ್ಲಿ
ಕೆಲವರನ್ನು ನೇಮಿಸಿರಿ; ಉಳಿದವರನ್ನು ಅವರವರ
ಮನೆಯ ಸಮೀಪದಲ್ಲಿಯೇ ಕಾಯಲು ನೇಮಿಸಿರಿ.’’

### ಸೆರೆಹಿಡಿಯಲ್ಪಟ್ಟವರಲ್ಲಿ ಹಿಂತಿರುಗಿಬಂದವರ ಪಟ್ಟಿ

4ಜೆರುಸಲೇಮ್ ಪಟ್ಟಣವು ವಿಸ್ತಾರವಾಗಿದ್ದರೂ ಅದ
ರಲ್ಲಿ ವಾಸಿಸುವ ಜನರು ಸ್ವಲ್ಪವೇ ಆಗಿದ್ದರು.
ಕೆಡವಲ್ಪಟ್ಟಿದ್ದ ಮನೆಗಳು ತಿರುಗಿ ಕಟ್ಟಲ್ಪಡಲಿಲ್ಲ.
5ಆದುದರಿಂದ ನನ್ನ ದೇವರು ನಮ್ಮ ಜನರನ್ನು
ಒಟ್ಟುಗೂಡಿಸುವಂತೆ ನನ್ನನ್ನು ಪ್ರೇರೇಪಿಸಿದನು.
ಅಂತೆಯೇ ನಾನು ಎಲ್ಲಾ ಗಣ್ಯರನ್ನು, ಅಧಿಕಾರಿಗಳನ್ನು
ಮತ್ತು ಸಾಮಾನ್ಯರನ್ನು ಒಟ್ಟಾಗಿ ಸೇರಿ ಬರಲು ಆಮಂತ್ರಿ
ಸಿದೆನು. ಇವರ ಕುಟುಂಬಗಳ ಪಟ್ಟಿಯನ್ನು ನಾನು

ಮಾಡಬೇಕಿತ್ತು. ಮೊಟ್ಟಮೊದಲನೆಯ ಸಾರಿ ಸೆರೆಯಿಂದ
ಹಿಂತಿರುಗಿ ಬಂದ ಸಂಸಾರಗಳ ಪಟ್ಟಿಯು ನನಗೆ
ದೊರೆಯಿತು. ಅದರ ವಿವರ ಹೀಗಿದೆ:
6 ಬಹಳ ಕಾಲದ ಹಿಂದೆ ಬಾಬಿಲೋನಿನ ಅರಸನಾದ
ನೆಬೂಕದ್ನೆಚ್ಚರನು ಇವರನ್ನು ಸೆರೆಯಾಳುಗಳನ್ನಾಗಿ
ಬಾಬಿಲೋನಿಗೆ ಒಯ್ದಿದ್ದನು. ಇವರು ಹಿಂದೆ
ಜೆರುಸಲೇಮಿಗೂ ಯೆಹೂದ ಪ್ರಾಂತ್ಯಕ್ಕೂ ಹಿಂತಿರುಗಿ
ತಮ್ಮ ತಮ್ಮ ಊರುಗಳಿಗೆ ಹೋಗಿ ನೆಲೆಸಿದರು. 7 ಇವರು
ಜೆರುಬ್ಬಾಬೆಲ್‌ನೊಂದಿಗೆ ಹಿಂತಿರುಗಿದರು. ಯೇಷೂವ,
ನೆಹೆಮೀಯ, ಅಜರ್ಯ, ರಗಮ್ಯ, ನಹಮಾನೀ,
ಮೊರ್ದೆಕೈ, ಬಿಲ್ಷಾನ್, ಮಿಸ್ಪೆರೆತ್, ಬಿಗ್ವೈ, ನೆಹೂಮ್
ಮತ್ತು ಬಾಣ. ಇಸ್ರೇಲಿನ ಜನರಲ್ಲಿ ಹಿಂದೆ ಬಂದವರ
ವಿವರ:

8 ಪರೋಷನ ಸಂತಾನದವರು 2,172
9 ಶೆಫಟ್ಯನ ಸಂತಾನದವರು 372
10 ಆರಹನ ಸಂತಾನದವರು 652
11 ಪಹತ್‌ಮೋವಾಬಿನವರಾದ ಯೇಷೂವನ ಮತ್ತು ಯೋವಾಬನ ಸಂತಾನದವರು 2,818
12 ಏಲಾಮನ ಸಂತಾನದವರು 1,254
13 ಜತ್ತೂವಿನ ಸಂತಾನದವರು 845
14 ಜಕ್ಕೈನ ಸಂತಾನದವರು 760
15 ಬಿನ್ನೂಯನ ಸಂತಾನದವರು 648
16 ಬೇಬೈಯ ಸಂತಾನದವರು 628
17 ಅಜ್ಗಾದಿನ ಸಂತಾನದವರು 2,322
18 ಅದೋನಿಕಾಮನ ಸಂತಾನದವರು 667
19 ಬಿಗ್ವೈನ ಸಂತಾನದವರು 2,067
20 ಆದೀನನ ಸಂತಾನದವರು 655
21 ಹಿಜ್ಕೀಯ ಕುಟುಂಬಕ್ಕೆ ಸೇರಿದ ಆಟೇರಿನ ಸಂತಾನದವರು 98
22 ಹಾಷುಮನ ಸಂತಾನದವರು 328
23 ಬೇಚೈಯ ಸಂತಾನದವರು 324
24 ಹಾರಿಫನ ಸಂತಾನದವರು 112
25 ಗಿಬ್ಯೋನನ ಸಂತಾನದವರು 95
26 ಬೇತ್ಲೆಹೇಮ್ ಮತ್ತು ನೆಟೋಫ ಊರಿನವರು 188
27 ಅನಾತೋತ್ ಊರಿನವರು 128
28 ಬೇತ್‌ಜ್ಮಾವೇತ್ ಪಟ್ಟಣದವರು 42
29 ಕಿರ್ಯತ್ಯಾರೀಮ್, ಕೆಫೀರಾ ಮತ್ತು ಬೇರೋತ್ ಪಟ್ಟಣದವರು 743
30 ರಾಮಾ ಮತ್ತು ಗೆಬ ಪಟ್ಟಣದವರು 621
31 ಮಿಕ್ಮಾಸಿಯ ಪಟ್ಟಣದವರು 122
32 ಬೇತೇಲ್ ಮತ್ತು ಆಯಿ ಪಟ್ಟಣದವರು 123
33 ನೆಬೋ ಎಂಬ ಇನ್ನೊಂದು ಪಟ್ಟಣದವರು 52
34 ಏಲಾಮ್ ಎಂಬ ಇನ್ನೊಂದು ಊರಿನವರು 1,254
35 ಹಾರಿಮ್ ಪಟ್ಟಣದವರು 320
36 ಯೆರಿಕೋ ಪಟ್ಟಣದವರು 345
37 ಲೋದ್, ಹಾದೀದ್ ಮತ್ತು ಓನೋ ಪಟ್ಟಣದವರು 721
38 ಸೆನಾಹ ಪಟ್ಟಣದವರು 3,930

39 ಯಾಜಕರಲ್ಲಿ:
ಯೆದಾಯನವರಾದ ಯೇಷೂವನ ಸಂತಾನದವರು 973
40 ಇಮ್ಮೇರನ ಸಂತಾನದವರು 1,052
41 ಪಷ್ಹೂರನ ಸಂತಾನದವರು 1,247
42 ಹಾರಿಮನ ಸಂತಾನದವರು 1,017

43 ಲೇವಿಕುಲದವರಲ್ಲಿ:
ಹೋದವ್ಯನವರಾದ ಯೇಷೂವನ ಮತ್ತು ಕದ್ಮೀಯೇಲನ ಸಂತಾನದವರು 74

44 ಗಾಯಕರಲ್ಲಿ:
ಆಸಾಫನ ಸಂತಾನದವರು 148

45 ದ್ವಾರಪಾಲಕರಲ್ಲಿ
ಶಲ್ಲೂಮ್, ಆಟೇರ್, ಟಲ್ಮೋನ್, ಅಕ್ಕೂಬ್, ಹಟೀಟಾ ಮತ್ತು ಶೋಬೈಯ ಸಂತಾನದವರು 138

46 ದೇವಾಲಯದ ಸೇವಕರಲ್ಲಿ:
ಜೀಹನ ಸಂತಾನದವರು, ಹಸೂಫ, ಟಬ್ಬಾವೋತ್,
47 ಕೇರೋಸ್, ಸೀಯ, ಪಾದೋನ್,
48 ಲೇಬಾನ, ಹಗಾಬ, ಸಲ್ಮೈ,
49 ಹಾನಾನ್, ಗಿದ್ದೇಲ್ ಗಹರ್,
50 ರೆವಾಯ, ರೆಜೀನ್, ನೆಕೋದ,
51 ಗಜ್ಜಾಮ್, ಉಜ್ಜ, ಪಾಸೇಹ,
52 ಬೇಸೈ, ಮೆಯನೀಮ್, ನೆಫೀಷೆಸೀಮ್,
53 ಬಕ್ಬೂಕ್, ಹಕ್ಕೂಫ, ಹರ್ಹೂರ್,
54 ಬಚ್ಲೂತ್,ಮೇಹೀದ್, ಹರ್ಶ
55 ಬರ್ಕೂಸ್, ಸೀಸೆರ, ತೆಮಹ,
56 ನೆಚೀಹ ಮತ್ತು ಹಟೀಫ.

57ಇವರು ಸೊಲೋಮೋನನ ಸೇವಕರ ಸಂತಾದವರು:

ಸೋಟೈ, ಸೋಫೆರೆತ್, ಪೆರೀದ,
58 ಯಾಲ, ದರ್ಕೋನ್, ಗಿದ್ದೇಲ್.
59 ಶೆಫಟ್ಯ, ಹಟ್ಟೀಲ್, ಪೋಕೆರೆತ್ ಹೆಚ್ಚೆಬಾ
ಯಿಮ್ ಮತ್ತು ಆಮೋನ್.
60 ದೇವಾಲಯದ ಸೇವಕರು
ಮತ್ತು ಸೊಲೊಮೋನನ ಸೇವಕರ
ಸಂತಾನದವರು 392

61ತೇಲ್ಮೆಲಹ ಪಟ್ಟಣದಿಂದ ಜೆರುಸಲೇಮಿಗೆ ಕೆಲವು
ಮಂದಿ ಬಂದರು. ತೇಲ್ಹರ್ಷ, ಕೆರೂಬದ್ದೋನ್ ಮತ್ತು
ಇಮ್ಮೇರ್ ಆದರೆ ಇವರು ನಿಜವಾಗಿಯೂ ಇಸ್ರೇಲ್
ಜನಾಂಗದವರೆಂಬದಾಗಿ ಅವರಿಗೆ ರುಜುವಾತು ಮಾಡ
ಲಾಗಲಿಲ್ಲ.

62 ದೆಲಾಯ, ಟೋಬೀಯ ಮತ್ತು
ನೆಕೋದನ ಸಂತಾನದವರು 642

63ಯಾಜಕರಲ್ಲಿ:

ಹೋಬಾಯ, ಹಕ್ಕೋಚ್, ಮತ್ತು ಬರ್ಜಿಲ್ಲೈ
(ಗಿಲ್ಯಾದ್ಯನಾದ ಬರ್ಜಿಲ್ಲೈಯ ಮಗಳನ್ನು
ಮದುವೆಯಾದವನು ಬರ್ಜಿಲ್ಲೈಯ ಎಂಬ ಹೆಸ
ರನ್ನು ಇಟ್ಟುಕೊಂಡಿದ್ದನು.) ಸಂತಾನದವರು.

64ಇವರು ತಮ್ಮ ವಂಶಾವಳಿಯ ಪತ್ರಗಳನ್ನು ಹುಡು
ಕಾಡಿದರೂ ಸಿಗಲಿಲ್ಲ. ತಮ್ಮ ಪೂರ್ವಿಕರು ಯಾಜಕ
ರೆಂದು ರುಜುವಾತು ಮಾಡಲು ಅವರಿಗೆ ಸಾಧ್ಯವಾಗ
ಲಿಲ್ಲ. ಆದುದರಿಂದ ಯಾಜಕ ಪಟ್ಟಿಯಲ್ಲಿ ಅವರನ್ನು
ಸೇರಿಸಲಿಲ್ಲ. 65ಒಬ್ಬ ಪ್ರಧಾನ ಯಾಜಕನು ಊರೀಮ್
ತುಮ್ಮೀಮ್ ಧರಿಸಿ ದೇವರಿಂದ ಉತ್ತರವನ್ನು ಹೊಂದುವ
ತನಕ ಅವರಲ್ಲಿ ಯಾರೂ ಪವಿತ್ರ ಆಹಾರದಲ್ಲಿ ಯಾವು
ದನ್ನೂ ತಿನ್ನಬಾರೆಂದು ರಾಜ್ಯಪಾಲನು ಆಜ್ಞಾಪಿಸಿದನು.
66-68ಹೀಗೆ ಹಿಂತಿರುಗಿ ಬಂದವರ ಒಟ್ಟು ಸಂಖ್ಯೆ
42,360 ಇವರಲ್ಲಿ 7,337 ಮಂದಿ ಅವರ ಸೇವಕ ಸೇವಕಿ
ಯರಾಗಿದ್ದರು, 245 ಮಂದಿ ಗಾಯಕ ಗಾಯಕಿಯರು
ಈ ಸಂಖ್ಯೆಯಲ್ಲಿ ಸೇರಿರಲಿಲ್ಲ. 68-69ಅವರಲ್ಲಿ 736
ಕುದುರೆಗಳು, 245 ಹೇಸರಕತ್ತೆಗಳು 435 ಒಂಟೆಗಳು
ಮತ್ತು 6,720 ಕತ್ತೆಗಳು ಇದ್ದವು.
70ಇವರ ಗೋತ್ರಪ್ರಧಾನರಲ್ಲಿ ಕೆಲವರು ಕೆಲಸಕ್ಕಾಗಿ
ಹಣವನ್ನು ದಾನವಾಗಿ ಕೊಟ್ಟರು. ರಾಜ್ಯಪಾಲನು
ಹತ್ತೊಂಬತ್ತು ಪೌಂಡು ಬಂಗಾರವನ್ನು, ಐವತ್ತು
ಬೋಗುಣಿಗಳನ್ನು ಮತ್ತು ಐನೂರ ಮೂವತ್ತು ಯಾಜ
ಕರ ವಸ್ತ್ರಗಳನ್ನು ಕೊಟ್ಟನು. 71ಗೋತ್ರಪ್ರಧಾನರು
ಮುನ್ನೂರ ಎಪ್ಪತ್ತೈದು ಪೌಂಡು ಬಂಗಾರವನ್ನು, ಹದಿ
ಮೂರುವರೆ ಕ್ವಿಂಟಾಲ್ ಬೆಳ್ಳಿಯನ್ನು ದಾನವಾಗಿ
ಕೊಟ್ಟರು. 72ಒಟ್ಟು ಇತರರು ಮುನ್ನೂರ ಎಪ್ಪತ್ತೈದು
ಪೌಂಡು ಬಂಗಾರ, ಹದಿಮೂರುವರೆ ಕ್ವಿಂಟಾಲ್ ಬೆಳ್ಳಿ
ಮತ್ತು ಅರವತ್ತೇಳು ಯಾಜಕರ ಬಟ್ಟೆಯನ್ನು ದಾನವಾಗಿ
ಕೊಟ್ಟರು.
73ಯಾಜಕರು, ಲೇವಿಯರು, ದ್ವಾರಪಾಲಕರು,
ಗಾಯಕರು ಮತ್ತು ದೇವಾಲಯದ ಸೇವಕರು ತಮ್ಮ ತಮ್ಮ
ಊರುಗಳಿಗೆ ಹೋಗಿ ನೆಲೆಸಿದರು. ಇತರ ಎಲ್ಲಾ
ಇಸ್ರೇಲರು ತಮ್ಮ ಪಟ್ಟಣಗಳಲ್ಲಿ ನೆಲೆಸಿದರು. ಆ ವರ್ಷದ
ಏಳನೆಯ ತಿಂಗಳಲ್ಲಿ ಎಲ್ಲಾ ಇಸ್ರೇಲರು ತಮ್ಮ ತಮ್ಮ
ಊರು ಪಟ್ಟಣಗಳಲ್ಲಿ ನೆಲೆಸಿದರು.

### ಎಜ್ರನ ಧರ್ಮಶಾಸ್ತ್ರ ಪಠಣ

8 ಆ ವರ್ಷದ ಏಳನೆಯ ತಿಂಗಳಲ್ಲಿ ಎಲ್ಲಾ ಇಸ್ರೇಲರು
ಒಂದೇ ಮನಸ್ಸುಳ್ಳವರಾಗಿ ಕೂಡಿಬಂದರು. ಅವರು
ಬುಗ್ಗೆಬಾಗಿಲಿನ ಮುಂದಿದ್ದ ಜಾಗದಲ್ಲಿ ಸೇರಿಬಂದರು.
ಇಸ್ರೇಲರಿಗೆ ಮೋಶೆಯ ಮೂಲಕವಾಗಿ ಯೆಹೋವನು
ಕೊಟ್ಟಿದ್ದ ಧರ್ಮಶಾಸ್ತ್ರವನ್ನು ಓದಲು ಜನರು ಎಜ್ರನನ್ನು
ಕೇಳಿಕೊಂಡರು. 2ಹೀಗೆ ಆ ವರ್ಷದ ಏಳನೆಯ ತಿಂಗಳಿನ
ಮೊದಲನೆಯ ದಿನದಲ್ಲಿ ಎಜ್ರನು ಧರ್ಮಶಾಸ್ತ್ರವನ್ನು ಆ
ಜನರ ಮುಂದೆ ತಂದನು. ಆ ಜನಸಮೂಹದಲ್ಲಿ ಧರ್ಮ
ಶಾಸ್ತ್ರಕ್ಕೆ ಕಿವಿಗೊಟ್ಟು ಗ್ರಹಿಸಿಕೊಳ್ಳಬಲ್ಲ ಸ್ತ್ರೀಪುರುಷರಿ
ದ್ದರು. 3ಎಜ್ರನು ಮುಂಜಾನೆಯಿಂದ ಹಿಡಿದು ಮಧ್ಯಾಹ್ನ
ದವರೆಗೆ ಬುಗ್ಗೆಬಾಗಿಲಿನ ಮುಂದೆ ಇರುವ ಮೈದಾನದಲ್ಲಿ
ಸೇರಿಬಂದಿದ್ದ ಜನರೆದುರಾಗಿ ನಿಂತು ಗಟ್ಟಿಯಾಗಿ ಧರ್ಮ
ಶಾಸ್ತ್ರವನ್ನು ಓದಿದನು. ಎಲ್ಲಾ ಜನರು ಎಚ್ಚರಿಕೆಯಿಂದ
ಕೇಳಿ ಧರ್ಮಶಾಸ್ತ್ರವನ್ನು ಗ್ರಹಿಸಿಕೊಂಡರು.
4ಆ ಸಮಯಕ್ಕೋಸ್ಕರವೇ ಕಟ್ಟಿದ ಮರದ ವೇದಿಕೆಯ
ಮೇಲೆ ಎಜ್ರನು ನಿಂತಿದ್ದನು. ಅವನ ಬಲಬದಿಯಲ್ಲಿ
ಮತ್ತಿತ್ಯ, ಶೆಮ, ಅನಾಯ, ಊರೀಯ ಹಿಲ್ಕೀಯ ಮತ್ತು
ಮಾಸೇಯ; ಎಡಬದಿಯಲ್ಲಿ ಪೆದಾಯ, ಮಿಷಾಯೇಲ್,
ಮಲ್ಕೀಯ, ಹಾಷುಮ್, ಹಷ್ಬದ್ದಾನ, ಜೆಕರ್ಯ ಮತ್ತು
ಮೆಷುಲ್ಲಾಮ್ ನಿಂತಿದ್ದರು.
5ಎಜ್ರನು ಎತ್ತರವಾದ ವೇದಿಕೆಯ ಮೇಲೆ ನಿಂತಿದ್ದ
ರಿಂದ ಎಲ್ಲರೂ ಅವನನ್ನು ನೋಡಲು ಸಾಧ್ಯವಾಯಿತು.
ಎಜ್ರನು ಧರ್ಮಶಾಸ್ತ್ರಗ್ರಂಥವನ್ನು ತೆರೆಯುವಾಗ ಎಲ್ಲಾ
ಜನರು ನಿಂತರು. 6ಎಜ್ರನು ಮಹೋನ್ನತ ದೇವರಾದ
ಯೆಹೋವನನ್ನು ಸ್ತುತಿಸಿದನು. ಆಗ ಜನರೆಲ್ಲರೂ ಕೈಗಳ
ನ್ನೆತ್ತಿ, ‘‘ಆಮೆನ್! ಆಮೆನ್!’’ ಎಂದು ಹೇಳಿದರು; ತಲೆ
ಬಾಗಿ ಯೆಹೋವನನ್ನು ಆರಾಧಿಸಿದರು.

7ಅವರೆಲ್ಲಾ ನಿಂತಿರುವಾಗ ಲೇವಿಯರು ಧರ್ಮಶಾಸ್ತ್ರ
ವನ್ನು ಅವರಿಗೆ ಓದಿತಿಳಿಸಿದರು. ಅವರು ಯಾರೆಂದರೆ:
ಯೇಷೂವ, ಬಾನೀ, ಶೇರೇಬ್ಯ, ಯಾಮೀನ್,
ಅಕ್ಕೂಬ್, ಶಬ್ಬೆತೈ, ಹೋದೀಯ, ಮಾಸೇಯ, ಕೆಲೀಟ,
ಅಜರ್ಯ, ಯೋಜಾಬಾದ್, ಹಾನಾನ್ ಮತ್ತು
ಪೆಲಾಯ. 8ಈ ಲೇವಿಯರು ಜನರಿಗೆ ಅರ್ಥವಾಗುವ
ರೀತಿಯಲ್ಲಿ ದೇವರ ಧರ್ಮಶಾಸ್ತ್ರವನ್ನು ವಿವರಿಸಿ
ಹೇಳಿದರು. 9ಆಗ ಜನರೆಲ್ಲಾ ಅಳಲು ಪ್ರಾರಂಭಿಸಿದರು.
ಆಗ ರಾಜಪಾಲನಾದ ನೆಹೆಮೀಯನೂ ಯಾಜಕನೂ
ಮತ್ತು ಉಪದೇಶಕನೂ ಆಗಿದ್ದ ಎಜ್ರನೂ, ಲೇವಿಯರೂ
ಎದ್ದುನಿಂತು ಜನರಿಗೆ, ‘‘ಈ ದಿನವು ನಿಮ್ಮ ದೇವರಾದ
ಯೆಹೋವನಿಗೆ ವಿಶೇಷ ದಿನವಾಗಿದೆ. ಆದುದರಿಂದ
ದುಃಖಿಸಬೇಡಿ ಮತ್ತು ಅಳಬೇಡಿರಿ’’ ಎಂದು ಹೇಳಿದರು.
10‘‘ಹೋಗಿ ಮೃಷ್ಟಾನ್ನ ಭೋಜನ ಮಾಡಿ ಸಿಹಿ
ಪಾನೀಯಗಳನ್ನು ಕುಡಿಯಿರಿ. ಅಡಿಗೆ ಮಾಡದೆ ಇದ್ದ
ವರಿಗೂ ಅವುಗಳನ್ನು ಕೊಡಿರಿ. ಈ ದಿನ ಯೆಹೋವನಿಗೆ
ವಿಶೇಷ ದಿನವಾಗಿದೆ. ದುಃಖಿಸಬೇಡಿರಿ. ಯಾಕಂದರೆ
ಯೆಹೋವನ ಸಂತೋಷವು ನಮ್ಮನ್ನು ಬಲಗೊಳಿ
ಸುತ್ತದೆ’’ ಎಂದು ನೆಹೆಮೀಯನು ಜನರಿಗೆ ಹೇಳಿದನು.
11ಲೇವಿಯರು ಜನರಿಗೆ, ‘‘ದುಃಖಿಸಬೇಡಿರಿ, ಈ ದಿನ
ವಿಶೇಷ ದಿನ. ಸಮಾಧಾನ ಮಾಡಿಕೊಳ್ಳಿ’’ ಎಂದು
ಹೇಳಿದರು.
12ಅನಂತರ ಎಲ್ಲರೂ ವಿಶೇಷ ಊಟಕ್ಕೆ ಹೋದರು.
ಅವರು ತಮ್ಮ ಆಹಾರವನ್ನು ಮತ್ತು ಪಾನೀಯವನ್ನು
ಹಂಚಿಕೊಂಡರು. ಅವರೆಲ್ಲರು ಸಂತೋಷದಿಂದ ಆ
ವಿಶೇಷ ದಿನವನ್ನು ಆಚರಿಸಿದರು. ಧರ್ಮೋಪದೇಶಕರು
ಉಪದೇಶಿಸಿದ ಯೆಹೋವನ ಕಟ್ಟಳೆಗಳನ್ನು ಅವರು
ಅರ್ಥಮಾಡಿಕೊಂಡರು. 13ಆ ತಿಂಗಳ ಎರಡನೆಯ
ದಿನದಲ್ಲಿ ಗೋತ್ರಪ್ರಧಾನೂ ಯಾಜಕರೂ ಲೇವಿ
ಯರೂ ಧರ್ಮಶಾಸ್ತ್ರವನ್ನು ಅಭ್ಯಾಸಿಸಲು ಉಪದೇಶಕ
ನಾದ ಎಜ್ರನ ಸುತ್ತಲೂ ಸೇರಿಬಂದರು.
14-15ಅವರು ಅಭ್ಯಾಸಿಸಿದಾಗ ಧರ್ಮಶಾಸ್ತ್ರದಲ್ಲಿ ಈ
ಆಜ್ಞೆಗಳನ್ನು ಕಂಡುಕೊಂಡರು: ‘‘ಏಳನೆಯ ತಿಂಗಳಲ್ಲಿ
ಯೆಹೋವನ ಆಜ್ಞೆಗನುಸಾರವಾಗಿ ವಿಶೇಷ ಹಬ್ಬವನ್ನು
ಆಚರಿಸಲು ಜೆರುಸಲೇಮಿನಲ್ಲಿ ಸೇರಿಬಂದು ತಾತ್ಕಾಲಿಕ
ವಾದ ಬಿಡಾರಗಳಲ್ಲಿ ವಾಸಿಸಬೇಕು. ಅವರು ತಮ್ಮ ಊರು
ಗಳ ಮತ್ತು ಜೆರುಸಲೇಮಿನ, ‘‘ಬೆಟ್ಟ ಪ್ರದೇಶಗಳಿಗೆ
ಹೋಗಿ ಆಲೀವ್, ಖರ್ಜೂರ, ಕಾಡು ಆಲೀವ್ ಸುಗಂಧ
ಮುಂತಾದ ಮರಗಳ ರೆಂಬೆಗಳನ್ನು ತೆಗೆದುಕೊಂಡು
ಬಂದು ಅವುಗಳಿಂದ ಆ ಬಿಡಾರಗಳನ್ನು ಮಾಡಬೇಕು’’
ಎಂಬುದಾಗಿ ಯೆಹೋವನು ಮೋಶೆಗೆ ಕೊಟ್ಟಿದ್ದ
ಆಜ್ಞೆಗಳೇ ಅವು.

16ಜನರು ಹೋಗಿ ರೆಂಬೆಗಳನ್ನು ತಂದು ತಮಗಾಗಿ
ತಾತ್ಕಾಲಿಕ ಬಿಡಾರಗಳನ್ನು ಮಾಡಿಕೊಂಡರು. ಅವರು ಈ
ಬಿಡಾರಗಳನ್ನು ತಮ್ಮ ಮನೆಯ ಮೇಲ್ಛಾವಣಿಗೆಯಲ್ಲೂ
ಮನೆಯ ಅಂಗಳಗಳಲ್ಲಿಯೂ, ದೇವಾಲಯದ ಅಂಗಳ
ದಲ್ಲಿಯೂ ‘‘ಬುಗ್ಗೆ’’ ಮತ್ತು ‘‘ಎಫ್ರಾಯೀಮ್’’ ಎಂಬ
ದ್ವಾರಗಳ ಸಮೀಪದಲ್ಲಿದ್ದ ಬಯಲುಗಳಲ್ಲಿಯೂ ಹಾಕಿ
ಕೊಂಡರು.
17ಸೆರೆವಾಸದಿಂದ ಮರಳಿಬಂದ ಇಸ್ರೇಲರು ಬಿಡಾರ
ಗಳನ್ನು ಹಾಕಿಕೊಂಡು ಅವುಗಳಲ್ಲಿ ವಾಸಿಸಿದರು. ನೂನನ
ಮಗನಾದ ಯೆಹೋಶುವನ ಕಾಲದಿಂದ ಇಂದಿನ
ವರೆಗೂ ಇಸ್ರೇಲರು ಇಂಥ ಪರ್ಣಶಾಲೆಗಳ ಹಬ್ಬವನ್ನು
ಆಚರಿಸಿರಲಿಲ್ಲ. ಪ್ರತಿಯೊಬ್ಬರೂ ಬಹು ಸಂತೋಷ
ಗೊಂಡಿದ್ದರು.
18ಆ ಹಬ್ಬದ ದಿನಗಳ ಪ್ರತಿಯೊಂದು ದಿನದಲ್ಲಿ ಎಜ್ರನು
ಧರ್ಮಶಾಸ್ತ್ರ ಪಾರಾಯಣ ಮಾಡಿದನು. ಮೊದಲನೆ ದಿನ
ದಿಂದ ಪ್ರಾರಂಭಿಸಿ ಕಡೆಯ ದಿನದ ತನಕ ಇಸ್ರೇಲ
ರೆಲ್ಲರೂ ಈ ಹಬ್ಬವನ್ನು ಏಳು ದಿನಗಳವರೆಗೆ ಆಚರಿ
ಸಿದರು. ಎಂಟನೆಯ ದಿನದಲ್ಲಿ ಧರ್ಮಶಾಸ್ತ್ರದ ಪ್ರಕಾರ
ವಿಶೇಷ ಕೂಟಗಳಿಗಾಗಿ ಜನರು ಒಟ್ಟಾಗಿ ಸೇರಿಬಂದರು.

### ಇಸ್ರೇಲ್ ಜನರು ತಮ್ಮ ಪಾಪಗಳನ್ನು ಅರಿಕೆ ಮಾಡಿದ್ದು

9 ಅದೇ ತಿಂಗಳಿನ ಇಪ್ಪತ್ತನಾಲ್ಕನೆಯ ದಿನದಲ್ಲಿ
ಇಸ್ರೇಲರು ತಿರಿಗಿ ಸೇರಿಬಂದು ಒಂದು ದಿನದ ಉಪ
ವಾಸ ಮಾಡಿದರು. ಶೋಕಬಟ್ಟೆಯನ್ನು ಧರಿಸಿ, ತಲೆಗೆ
ಬೂದಿಯನ್ನು ಹಾಕಿ ತಮ್ಮ ತಮ್ಮ ದುಃಖವನ್ನು ವ್ಯಕ್ತ
ಪಡಿಸಿದರು. 2ಅನ್ಯರ ಮಧ್ಯದಿಂದ ಇಸ್ರೇಲರು ತಮ್ಮನ್ನು
ಪ್ರತ್ಯೇಕಿಸಿಕೊಂಡರು. ಅವರು ದೇವಾಲಯದೊಳಗೆ
ನಿಂತು ತಮ್ಮ ಮತ್ತು ತಮ್ಮ ಪೂರ್ವಿಕರ ಪಾಪಗಳನ್ನು ಅರಿಕೆ
ಮಾಡಿದರು. 3ಮೂರು ತಾಸಿನ ತನಕ ಅವರು ನಿಂತು
ಕೊಂಡೇ ತಮ್ಮ ದೇವರಾದ ಯೆಹೋವನ ಧರ್ಮಶಾಸ್ತ್ರ
ವನ್ನು ಕೇಳಿದರು; ಇನ್ನು ಮೂರು ತಾಸಿನ ತನಕ ತಮ್ಮ
ತಮ್ಮ ಪಾಪಗಳನ್ನು ಅರಿಕೆ ಮಾಡಿಕೊಂಡು ತಮ್ಮ
ದೇವರಾದ ಯೆಹೋವನಿಗೆ ತಲೆಬಾಗಿ ಆರಾಧಿಸಿದರು.
4ಆಮೇಲೆ ಲೇವಿಯರಾದ ಯೇಷೂವ, ಬಾನೀ,
ಕದ್ಮೀಯೇಲ್, ಶೆಬನ್ಯ, ಬುನ್ನೀ, ಶೇರೇಬ್ಯ, ಬಾನೀ
ಮತ್ತು ಕೆನಾನೀ ಎಂಬವರು ಮೆಟ್ಟಿಲ ಮೇಲೆ ನಿಂತು
ಕೊಂಡು ಗಟ್ಟಿಯಾದ ಸ್ವರದಲ್ಲಿ ತಮ್ಮ ದೇವರಾದ
ಯೆಹೋವನಿಗೆ ಮೊರೆಯಿಟ್ಟರು. 5ಆ ಬಳಿಕ, ಲೇವಿಯ
ರಾದ ಯೇಷೂವ, ಕದ್ಮೀಯೇಲ್, ಬಾನೀ, ಹಷಬ್ನೆಯ,
ಶೇರೇಬ್ಯ, ಹೋದೀಯ, ಶೆಬನ್ಯ, ಮತ್ತು ಪೆತಹ್ಯ
ಎಂಬವರು, ‘‘ಎದ್ದು ನಿಂತುಕೊಂಡು ನಿಮ್ಮ ದೇವರಾದ
ಯೆಹೋವನನ್ನು ಸ್ತುತಿಸಿರಿ’’ ಎಂದು ಹೇಳಿದರು.

ದೇವರು ಯಾವಾಗಲೂ ಇದ್ದಾತನಾಗಿದ್ದಾನೆ ಮತ್ತು ಯಾವಾಗಲೂ ಇರುವಾತನಾಗಿದ್ದಾನೆ. ನಿನ್ನ ಮಹಿಮಾಪೂರ್ಣವಾದ ಹೆಸರನ್ನು ಜನರು ಕೊಂಡಾಡಲಿ; ನಿನ್ನ ಹೆಸರು ಎಲ್ಲಾ ಸ್ತುತಿ ಕೀರ್ತನೆಗಳಿಗೆ ಮಿಗಿಲಾಗಿ ಎತ್ತಲ್ಪಡಲಿ.

6 ನೀನು ದೇವರಾಗಿರುವೆ. ಯೆಹೋವನೇ, ನೀನೊಬ್ಬನೇ ದೇವರು. ನೀನು ಆಕಾಶವನ್ನು ಉಂಟುಮಾಡಿರುವೆ. ಪರಲೋಕವನ್ನು ನೀನೇ ಮಾಡಿರುವೆ. ಅದರಲ್ಲಿರುವದನ್ನೆಲ್ಲಾ ನೀನೇ ನಿರ್ಮಿಸಿರುವೆ. ಭೂಮಿಯನ್ನೂ ಅದರಲ್ಲಿರುವ ಸಮಸ್ತವನ್ನೂ ಸೃಷ್ಟಿಸಿದ್ದು ನೀನೇ. ಸಮುದ್ರಗಳನ್ನೂ ಅವುಗಳಲ್ಲಿರುವ ಸಮಸ್ತವನ್ನೂ ಸೃಷ್ಟಿಸಿದಾತನು ನೀನೇ. ಎಲ್ಲಾದಕ್ಕೂ ಜೀವ ಕೊಡುವಾತನು ನೀನೇ. ಪರಲೋಕದ ದೂತರು ನಿನಗಡ್ಡಬಿದ್ದು ಆರಾಧಿಸುವರು.

7 ನೀನೇ ದೇವರಾದ ಯೆಹೋವನು. ಅಬ್ರಾಮನನ್ನು ನೀನೇ ಆರಿಸಿಕೊಂಡೆ. ಬಾಬಿಲೋನಿನ ಊರ್ ಎಂಬಲ್ಲಿಂದ ನೀನು ಅವನನ್ನು ನಡೆಸಿದೆ. ಅವನ ಹೆಸರನ್ನು ಬದಲಾಯಿಸಿ ಅಬ್ರಹಾಮನೆಂದು ಕರೆದೆ.

8 ಅವನು ನ್ಯಾಯವಂತನೂ ಪ್ರಾಮಾಣಿಕನೂ ಆಗಿದ್ದಾನೆಂದು ತಿಳಿದು ಅವನೊಂದಿಗೆ ಒಡಂಬಡಿಕೆ ಮಾಡಿಕೊಂಡೆ. ಹಿತ್ತಿಯರ, ಕಾನಾನ್ಯರ, ಅಮೋರಿಯರ, ಪೆರಿಜ್ಜೀಯರ, ಯೆಬೂಸಿಯರ ಮತ್ತು ಗಿರ್ಗಾಷಿಯರ ನಾಡನ್ನು ಅವನಿಗೂ ಅವನ ಸಂತತಿಯವರಿಗೂ ಕೊಡುವುದಾಗಿ ವಾಗ್ದಾನ ಮಾಡಿದೆ. ನೀನು ನಿನ್ನ ವಾಗ್ದಾನವನ್ನು ನೆರವೇರಿಸಿದೆ. ಯಾಕಂದರೆ ನೀನು ಒಳ್ಳೆಯವನಾಗಿರುವೆ.

9 ನಮ್ಮ ಪೂರ್ವಿಕರು ಈಜಿಪ್ಟಿನಲ್ಲಿ ಸಂಕಟ ಅನುಭವಿಸುವುದನ್ನು ನೀನು ನೋಡಿದೆ. ಕೆಂಪುಸಮುದ್ರದ ಬಳಿ ಸಹಾಯಕ್ಕಾಗಿ ಅವರು ಮೊರೆಯಿಟ್ಟಾಗ ನೀನು ಅವರಿಗೆ ಕಿವಿಗೊಟ್ಟೆ,

10 ಫರೋಹನಿಗೂ ಅವನ ಅಧಿಕಾರಿಗಳಿಗೂ ಅವನ ಜನರಿಗೂ ವಿರೋಧವಾಗಿ ನೀನು ಅದ್ಭುತ ಕಾರ್ಯಗಳನ್ನೂ ಸೂಚಕ ಕಾರ್ಯಗಳನ್ನೂ ಮಾಡಿದೆ. ಈಜಿಪ್ಟಿನವರು ತಮ್ಮನ್ನು ನಮ್ಮ ಪೂರ್ವಿಕರಿಗಿಂತ ಉತ್ತಮರೆಂದು ಭಾವಿಸಿಕೊಂಡಿದ್ದುದ್ದು ನಿನಗೆ ಗೊತ್ತಿತ್ತು. ಆದರೆ ನೀನು ಎಂಥಾ ಮಹಾ ವ್ಯಕ್ತಿಯೆಂದು ಅವರಿಗೆ ರುಜುವಾತುಪಡಿಸಿದೆ! ಅದನ್ನು ಈಗಲೂ ಅವರು ನೆನಪುಮಾಡುತ್ತಿರುತ್ತಾರೆ.

11 ಕೆಂಪುಸಮುದ್ರವನ್ನು ಅವರ ಕಣ್ಣು ಮುಂದೆಯೇ ಇಬ್ಭಾಗ ಮಾಡಿದೆ. ಅವರು ಆ ಒಣನೆಲದಲ್ಲಿ ನಡೆದರು. ಈಜಿಪ್ಟಿನ ವೈರಿಗಳು ಅವರನ್ನು ಹಿಂಬಾಲಿಸುತ್ತಿದ್ದರು. ಆದರೆ ಆ ವೈರಿಗಳನ್ನು ನೀನು ಸಮುದ್ರದೊಳಗೆ ಬಿಸಾಡಿದೆ; ಅವರು ಗುಂಡುಕಲ್ಲಿನಂತೆ ಸಮುದ್ರದಲ್ಲಿ ಮುಳುಗಿದರು.

12 ಹಗಲಿನಲ್ಲಿ ಅವರನ್ನು ನಡೆಸಲು ಮೇಘಸ್ತಂಭವನ್ನು ಉಪಯೋಗಿಸಿದೆ. ರಾತ್ರಿವೇಳೆಯಲ್ಲಿ ಅಗ್ನಿಸ್ತಂಭವನ್ನು ಉಪಯೋಗಿಸಿದೆ. ಹೀಗೆ ಅವರ ಮಾರ್ಗವನ್ನು ಬೆಳಕಿನಿಂದ ಹೊದಿಸಿದೆ. ಎಲ್ಲಿಗೆ ಹೋಗಬೇಕೆಂದು ಅವರಿಗೆ ತೋರಿಸಿದಿ.

13 ಆಮೇಲೆ ಸೀನಾಯಿ ಬೆಟ್ಟಕ್ಕೆ ಇಳಿದುಬಂದೆ. ಪರಲೋಕದಿಂದ ಅವರೊಂದಿಗೆ ಮಾತನಾಡಿದೆ. ಅವರಿಗೆ ಒಳ್ಳೆಯ ಕಟ್ಟಳೆಗಳನ್ನು ದಯಪಾಲಿಸಿದೆ; ಸತ್ಯಬೋಧನೆಯನ್ನು ನೀಡಿದೆ, ವಿಧಿನಿಯಮಗಳನ್ನು ಕಲಿಸಿದೆ. ಅವುಗಳೆಲ್ಲಾ ಉತ್ತಮವಾದವುಗಳೇ.

14 ಅವರಿಗೆ ನಿನ್ನ ವಿಶೇಷ ದಿನವಾದ ಸಬ್ಬತ್ತನ್ನು ತಿಳಿಸಿದೆ. ನಿನ್ನ ಸೇವಕನಾದ ಮೋಶೆಯ ಮುಖಾಂತರ ಅವರಿಗೆ ಕಟ್ಟಳೆಗಳನ್ನು ತಿಳಿಸಿದೆ.

15 ಅವರು ಹಸಿದಿದ್ದಾಗ ಪರಲೋಕದಿಂದ ಊಟವನ್ನು ಅವರಿಗೆ ದಯಪಾಲಿಸಿದೆ. ಅವರು ಬಾಯಾರಿದಾಗ ಬಂಡೆಯಿಂದ ಅವರಿಗೆ ನೀರನ್ನು ಕೊಟ್ಟೆ. ನೀನು ಅವರಿಗೆ, ''ಬನ್ನಿ ಈ ದೇಶವನ್ನು ತೆಗೆದುಕೊಳ್ಳಿರಿ, ಎಂದು ಹೇಳಿದೆ. ನಿನ್ನ ಪರಾಕ್ರಮವನ್ನು ತೋರಿಸಿದೆ. ಅವರಿಗಾಗಿ ಭೂಮಿಯನ್ನು ತೆಗೆದುಕೊಂಡೆ.

16 ನಮ್ಮ ಪೂರ್ವಿಕರು ಹೆಮ್ಮೆಯಿಂದ ತುಂಬಿದರು; ಅವರು ಹಠಮಾರಿಗಳಾದರು; ನಿನ್ನ ಆಜ್ಞೆಯನ್ನು ಪರಿಪಾಲಿಸಲು ನಿರಾಕರಿಸಿದರು.

17 ನಿನ್ನ ಮಾತನ್ನು ಕೇಳಲು ನಿರಾಕರಿಸಿದರು. ಅವರಿಗಾಗಿ ಅದ್ಭುತಕಾರ್ಯಗಳನ್ನು ಮಾಡಿದ್ದನ್ನು ಅವರು ಮರೆತರು. ಅವರು ಹಠಮಾರಿಗಳಾದರು. ತಮ್ಮನ್ನು ಈಜಿಪ್ಟಿನ ಗುಲಾಮಗಿರಿಗೆ ಮತ್ತೆ ಕರೆದೊಯ್ಯಲು ಒಬ್ಬ ನಾಯಕನನ್ನು ನೇಮಿಸಲು ಅವರು ನಿರ್ಧರಿಸಿದರು.* ಆದರೆ ನೀನು ಕ್ಷಮಿಸುವ ದೇವರಾಗಿರುವೆ. ನೀನು ಕನಿಕರ ಉಳ್ಳವನಾಗಿರುವೆ; ನೀನು ತಾಳ್ಮೆಯುಳ್ಳವನೂ ಪ್ರೀತಿಸ್ವರೂಪನೂ ಆಗಿರುವೆ. ಆದುದರಿಂದ ನೀನು ಅವರನ್ನು ತೊರೆಯಲಿಲ್ಲ.

---

**ತಮ್ಮನ್ನು … ನಿರ್ಧರಿಸಿದರು** ಈ ಘಟನೆ ಅರಣ್ಯಕಾಂಡ 14:4ರಲ್ಲಿ ಉಲ್ಲೇಖಗೊಂಡಿದೆ.

18 ಅವರು ಬಂಗಾರದಿಂದ ಕರುವಿನಾಕೃತಿಯ ವಿಗ್ರಹ
ವನ್ನು ಮಾಡಿ, ''ಈ ವಿಗ್ರಹವೇ ನಮ್ಮನ್ನು ಈಜಿಪ್ಟಿ
ನಿಂದ ಕರೆದುಕೊಂಡು ಬಂದದ್ದು'' ಎಂದು
ಹೇಳಿದರೂ ನೀನು ಅವರನ್ನು ತೊರೆದುಬಿಡಲಿಲ್ಲ.
ಅವರು ನಿನಗೆ ವಿರೋಧವಾಗಿ ದೂಷಿಸಿ ಪಾಪ
ಮಾಡಿದರು.
19 ನೀನು ತುಂಬಾ ಕನಿಕರವುಳ್ಳ ದೇವರು. ಆದ್ದರಿಂದ
ಅವರನ್ನು ಮರುಭೂಮಿಯಲ್ಲಿಯೇ ಬಿಡಲಿಲ್ಲ.
ಹಗಲಿನಲ್ಲಿ ಅವರಿಂದ ಎತ್ತರವಾದ ಮೋಡವನ್ನು
ತೆಗೆದುಬಿಡಲಿಲ್ಲ. ನೀನು ಅವರನ್ನು ಮುನ್ನಡೆಸಿ
ಕೊಂಡೇ ಹೋದೆ. ರಾತ್ರಿಯಲ್ಲಿ ಅವರಿಂದ ಅಗ್ನಿ
ಸ್ತಂಭವನ್ನು ತೆಗೆದುಬಿಡಲಿಲ್ಲ. ಅವರ ದಾರಿಗೆ ಬೆಳ
ಕನ್ನು ನೀಡುತ್ತಾ ಅವರು ಹೋಗತಕ್ಕ ದಾರಿಯಲ್ಲಿ
ಮುನ್ನಡೆಸಿದೆ.
20 ಅವರು ಬುದ್ಧಿವಂತರಾಗುವಂತೆ ನಿನ್ನ ಒಳ್ಳೆಯ ಆತ್ಮ
ನನ್ನು ಕೊಟ್ಟೆ. ಮನ್ನವನ್ನು ಅವರಿಗೆ ಆಹಾರವಾಗಿ
ಕೊಟ್ಟೆ. ಅವರು ಬಾಯಾರಿದಾಗ ನೀರು ಕೊಟ್ಟೆ.
21 ನಲವತ್ತು ವರುಷ ಅವರನ್ನು ಸಾಕಿದೆ. ಆ ಮರು
ಭೂಮಿಯಲ್ಲಿ ಅವರಿಗೆ ಬೇಕಾದದ್ದೆ ದೊರಕಿತು.
ಅವರ ಬಟ್ಟೆಯು ಹರಿದುಹೋಗಲಿಲ್ಲ. ಅವರ
ಪಾದಗಳು ನೋವಿನಿಂದ ಊದಿಕೊಳ್ಳಲಿಲ್ಲ.
22 ಯೆಹೋವನೇ, ನೀನು ಅವರಿಗೆ ರಾಜ್ಯಗಳನ್ನೂ
ಜನಾಂಗಗಳನ್ನೂ ಕೊಟ್ಟೆ. ಕೆಲವೇ ಜನರು ವಾಸ
ವಾಗಿದ್ದ ಬಹುದೂರದ ಸ್ಥಳಗಳನ್ನು ಕೊಟ್ಟೆ.
ಹೆಷ್ಬೋನಿನ ರಾಜನಾದ ಸೀಹೋನನ ನಾಡನ್ನು
ಮತ್ತು ಬಾಷಾನಿನ ರಾಜನಾದ ಓಗನ ನಾಡನ್ನು
ಅವರು ಪಡೆದುಕೊಂಡರು.
23 ಅವರ ಸಂತತಿಯವರನ್ನು ಆಕಾಶದ ನಕ್ಷತ್ರಗಳಷ್ಟು
ಮಾಡಿದೆ. ಅವರ ಪೂರ್ವಿಕರಿಗೆ ಕೊಡುತ್ತೇನೆಂದು
ವಾಗ್ದಾನ ಮಾಡಿದ ದೇಶಕ್ಕೆ ತಂದೆ. ಅವರು
ಒಳಹೊಕ್ಕು ದೇಶವನ್ನು ಆಕ್ರಮಿಸಿದರು.
24 ಆ ಮಕ್ಕಳು ದೇಶವನ್ನು ಸ್ವಾಧೀನಪಡಿಸಿಕೊಂಡರು;
ಅಲ್ಲಿ ವಾಸಿಸಿದ್ದ ಕಾನಾನ್ಯರನ್ನು ಓಡಿಸಿದರು.
ಅವರನ್ನು ಸೋಲಿಸುವಂತೆ ನೀನೇ ಮಾಡಿದೆ. ಆ
ರಾಜ್ಯಗಳಿಗೆ, ರಾಜರುಗಳಿಗೆ ಅವರು ಮಾಡ
ಬೇಕೆಂದಿದ್ದನ್ನು ಮಾಡುವಂತೆ ಅವರಿಗೇ ಅವಕಾಶ
ಮಾಡಿಕೊಟ್ಟೆ.
25 ಬಲಾಢ್ಯ ನಗರಗಳನ್ನು ಸ್ವಾಧೀಪಡಿಸಿಕೊಂಡರು.
ಉತ್ತಮವಾದ ಭೂಮಿಯನ್ನು ವಶಪಡಿಸಿ
ಕೊಂಡರು. ಒಳ್ಳೆಯ ವಸ್ತುಗಳಿಂದ ತುಂಬಿದ್ದ ಮನೆ
ಗಳನ್ನು ಅವರು ವಶಪಡಿಸಿಕೊಂಡರು. ಅಗೆದು
ತಯಾರಾಗಿದ್ದ ಬಾವಿಗಳನ್ನು ಅವರಿಗೆ ನೀನು
ಕೊಟ್ಟೆ. ದ್ರಾಕ್ಷಿತೋಟವನ್ನು ಎಣ್ಣೆಮರಗಳ
ತೋಪನ್ನು ಬೇಕಾದಷ್ಟು ಹಣ್ಣಿನ ಮರಗಳನ್ನು
ನೀನು ಅವರಿಗೆ ಕೊಟ್ಟೆ. ಅವರ ಹೊಟ್ಟೆ ತುಂಬಿ
ಕೊಬ್ಬೇರುವಷ್ಟು ಅವರಿಗೆ ಕೊಟ್ಟೆ. ನೀನು
ಕೊಟ್ಟ ಉತ್ತಮವಾದ ವಸ್ತುಗಳಲ್ಲಿ ಅವರು
ಆನಂದಿಸಿದರು.
26 ಅವರು ನಿನಗೆ ಎದುರುಬಿದ್ದು ನಿನ್ನ ಬೋಧನೆ
ಯನ್ನು ತಾತ್ಸಾರ ಮಾಡಿದರು; ನಿನ್ನ ಪ್ರವಾದಿ
ಗಳನ್ನು ಕೊಂದರು. ಆ ಪ್ರವಾದಿಗಳಾದರೋ
ಜನರನ್ನು ಎಚ್ಚರಿಸಿದರು; ನಿನ್ನ ಬಳಿಗೆ ಹಿಂತಿರುಗು
ವಂತೆ ಜನರನ್ನು ಪ್ರೋತ್ಸಾಹಿಸಿದರು. ಆದರೆ ನಮ್ಮ
ಪೂರ್ವಿಕರು ನಿನಗೆ ವಿರೋಧವಾಗಿ ಭಯಂಕರ
ವಾದ ಕೃತ್ಯಗಳನ್ನು ಮಾಡಿದರು.
27 ಆದುದರಿಂದ ಅವರ ಶತ್ರುಗಳು ಅವರನ್ನು ಸದೆ
ಬಡಿಯುವಂತೆ ಮಾಡಿದೆ. ವೈರಿಗಳು ಅವರಿಗೆ
ತುಂಬಾ ಕಷ್ಟಕೊಟ್ಟರು. ಕಷ್ಟ ಬಂದಾಗ ನಮ್ಮ
ಪೂರ್ವಿಕರು ನಿನಗೆ ಮೊರೆಯಿಟ್ಟರು. ಪರಲೋಕ
ದಿಂದ ನೀನು ಅವರನ್ನು ಆಲೈಸಿದೆ. ನಿನ್ನ ಮಹಾ
ಕರುಣೆಗನುಸಾರವಾಗಿ ನೀನು ಅವರ ಬಳಿಗೆ
ಜನರನ್ನು ಕಳುಹಿಸಿ ಅವರನ್ನು ಅವರ ವೈರಿಗಳ
ಕೈಗಳಿಂದ ರಕ್ಷಿಸಿದೆ.
28 ನಮ್ಮ ಪೂರ್ವಿಕರಿಗೆ ವಿಶ್ರಾಂತಿ ಸಿಕ್ಕಿದ ಕೂಡಲೇ
ಅವರು ಮತ್ತೆ ದುಷ್ಕೃತ್ಯಗಳನ್ನು ಮಾಡಲಾರಂಭಿಸಿ
ದರು. ಆದ್ದರಿಂದ ಆ ವೈರಿಗಳು ಅವರನ್ನು ಸೋಲಿಸಿ
ಶಿಕ್ಷಿಸುವಂತೆ ನೀನು ಮಾಡಿದೆ. ಅವರು ನಿನ್ನ
ಸಹಾಯಕ್ಕಾಗಿ ಮೊರೆಯಿಟ್ಟರು. ಪರಲೋಕದಲ್ಲಿ
ನೀನು ಅವರ ಮೊರೆಯನ್ನು ಕೇಳಿ ಅವರಿಗೆ
ಸಹಾಯಮಾಡಿದೆ. ನೀನು ದಯಾಳು! ಈ ರೀತಿ
ಅನೇಕಸಲ ಆಯಿತು.
29 ನೀನು ಅವರನ್ನು ಎಚ್ಚರಿಸಿದೆ. ನನ್ನ ಕಡೆಗೆ ತಿರುಗಿರಿ
ಎಂದು ಎಚ್ಚರಿಸಿದೆ. ಆದರೆ ಅವರು ಗರ್ವಿಷ್ಟರಾಗಿ
ನಿನ್ನ ಆಜ್ಞೆಗಳನ್ನು ನಿರಾಕರಿಸಿದರು. ನಿನ್ನ ಆಜ್ಞೆ
ಗಳನ್ನು ಅನುಸರಿಸುವ ಜನರು ನಿಜವಾಗಿಯೂ
ಬಾಳುವರು. ನಮ್ಮ ಪೂರ್ವಿಕರು ನಿನ್ನ ಆಜ್ಞೆಯನ್ನು
ಮುರಿದುಹಾಕಿದರು; ಅವರು ಹಠಮಾರಿಗಳಾಗಿ
ನಿನಗೆ ವಿಮುಖರಾದರು; ನಿನ್ನ ಮಾತುಗಳನ್ನು
ಕೇಳದೆ ಹೋದರು.
30 ನೀನು ನಮ್ಮ ಪೂರ್ವಿಕರ ವಿಷಯದಲ್ಲಿ ತಾಳ್ಮೆ
ಯಿಂದಿದ್ದೆ. ನಿನ್ನ ವಿಷಯದಲ್ಲಿ ತಪ್ಪಾಗಿ ನಡೆದು
ಕೊಳ್ಳಲು ಅನೇಕ ವರ್ಷಗಳವರೆಗೆ ಅವರನ್ನು ಬಿಟ್ಟು
ಬಿಟ್ಟೆ. ನೀನು ಅವರನ್ನು ನಿನ್ನ ಆತ್ಮನಿಂದ
ಎಚ್ಚರಿಸಿದೆ; ಅವರನ್ನು ಎಚ್ಚರಿಸಲು ನಿನ್ನ

ಪ್ರವಾದಿಗಳನ್ನು ಕಳುಹಿಸಿದೆ. ಆದರೆ ನಮ್ಮ ಪೂರ್ವಿಕರು ಕಿವಿ ಕೊಡಲಿಲ್ಲ. ಆದುದರಿಂದ ಪರರಾಜ್ಯದ ಜನರಿಗೆ ಅವರನ್ನು ಒಪ್ಪಿಸಿದೆ.

31 ಆದರೂ ನೀನು ದಯಾವಂತನು ಅವರನ್ನು ಸಂಪೂರ್ಣವಾಗಿ ನಾಶಮಾಡಲಿಲ್ಲ. ಅವರನ್ನು ತೊರೆಯಲಿಲ್ಲ. ನೀನು ಅಂಥಾ ದಯಾಪರನಾದ ದೇವರು.

32 ನಮ್ಮ ದೇವರೇ, ನೀನು ಮಹಾ ದೇವರು, ಭಯಂಕರನೂ ಬಲಿಷ್ಠ ಸೈನಿಕನೂ ಆಗಿರುವ ದೇವರು! ನೀನು ದಯಾಪರನೂ ನಂಬಿಗಸ್ತನೂ ಆಗಿರುವಿ. ನಿನ್ನ ಒಡಂಬಡಿಕೆಯನ್ನು ನೆರವೇರಿಸುವ ದೇವರು. ನಾವು ತುಂಬಾ ಸಂಕಟಗಳನ್ನು ಅನುಭವಿಸಿದೆವು. ನಮ್ಮ ಸಂಕಟಗಳು ನಿನಗೆ ವಿಶೇಷವಾದವುಗಳಾಗಿವೆ. ನಮ್ಮ ಜನರಿಗೆಲ್ಲಾ ತೊಂದರೆಗಳುಂಟಾದವು. ನಮ್ಮ ನಾಯಕರಿಗೂ ರಾಜನಿಗೂ ನಮ್ಮ ಯಾಜಕರಿಗೂ ಪ್ರವಾದಿಗಳಿಗೂ ಅಶ್ಶೂರ್ಯದ ರಾಜನ ಸಮಯದಿಂದ ಈ ದಿವಸದ ತನಕ ಭಯಂಕರ ಕಷ್ಟಗಳು ಬಂದೊದಗಿದವು.

33 ಆದರೆ ದೇವರೇ, ನಮಗೆ ಸಂಭವಿಸುವ ಪ್ರತಿಯೊಂದರಲ್ಲೂ ನಿನ್ನದೇನೂ ತಪ್ಪಿಲ್ಲ. ನೀನು ನ್ಯಾಯವಂತನೇ ಸರಿ. ನಾವೇ ತಪ್ಪಿತಸ್ಥರು.

34 ನಮ್ಮ ರಾಜರುಗಳು, ನಾಯಕರು, ಯಾಜಕರು ಮತ್ತು ನಮ್ಮ ಪೂರ್ವಿಕರು ನಿನ್ನ ಆಜ್ಞೆಯನ್ನು ಅನುಸರಿಸಲಿಲ್ಲ. ನಿನ್ನ ಎಚ್ಚರಿಕೆಯನ್ನು ಲಕ್ಷ್ಯಕ್ಕೆ ತರಲಿಲ್ಲ.

35 ನಮ್ಮ ಪೂರ್ವಿಕರು ನಿನ್ನ ಸೇವೆ ಮಾಡಲಿಲ್ಲ. ತಮ್ಮ ಸ್ವಂತ ದೇಶದಲ್ಲಿ ವಾಸಿಸುವಾಗಲೂ ನಿನ್ನ ಸೇವೆ ಮಾಡಲಿಲ್ಲ; ಕೆಟ್ಟತನವನ್ನು ನಡಿಸುವುದನ್ನು ನಿಲ್ಲಿಸಲಿಲ್ಲ. ನೀನು ಕೊಟ್ಟ ಉತ್ತಮ ವಸ್ತುಗಳಲ್ಲಿಯೂ ಉತ್ತಮ ಭೂಮಿಯಲ್ಲಿಯೂ ಆನಂದಿಸಿದರು. ಅವರಿಗೆ ಬೇಕಾದಷ್ಟು ಜಮೀನಿತ್ತು. ಆದರೂ ಅವರು ದುಷ್ಟತನವನ್ನು ನಿಲ್ಲಿಸಲಿಲ್ಲ.

36 ಈಗ ನಾವು ಈ ನಾಡಿನಲ್ಲಿ ಗುಲಾಮರಾಗಿದ್ದೇವೆ. ಈ ನಾಡಿನ ಫಲವನ್ನು ಮತ್ತು ಇದರಲ್ಲಿ ಬೆಳೆಯುವ ಒಳ್ಳೆಯ ಫಸಲುಗಳನ್ನು ಅನುಭವಿಸಲು ನೀನು ಈ ನಾಡನ್ನು ನಮ್ಮ ಪೂರ್ವಿಕರಿಗೆ ಕೊಟ್ಟೆ.

37 ಫಸಲು ಇಲ್ಲಿ ಉತ್ತಮವಾಗಿದೆ. ನಾವು ಪಾಪ ಮಾಡಿದ್ದರಿಂದ ನಮ್ಮ ಸುಗ್ಗಿಯು ನಮ್ಮನ್ನಾಳುವ ರಾಜರಿಗೆ ಹೋಗಿಬಿಡುತ್ತದೆ. ಆ ರಾಜರುಗಳು ನಮ್ಮನ್ನೂ ನಮ್ಮ ದನಕರುಗಳನ್ನೂ ತಮ್ಮ ಹತೋಟಿಯೊಳಗೆ ಇಟ್ಟಿರುತ್ತಾರೆ. ನಮ್ಮನ್ನು ತಮಗೆ ಇಷ್ಟಬಂದಂತೆ ನಡಿಸುತ್ತಾರೆ. ಆದುದರಿಂದ ನಾವು ಬಹಳ ಸಂಕಟದಲ್ಲಿ ಸಿಕ್ಕಿಕೊಂಡಿದ್ದೇವೆ.

38 ಈ ಕಾರಣಗಳಿಂದ ಶಾಶ್ವತವಾದ ಒಡಂಬಡಿಕೆಯನ್ನು ನಾವು ನಿನ್ನೊಂದಿಗೆ ಮಾಡುತ್ತೇವೆ. ಆ ಒಡಂಬಡಿಕೆಯನ್ನು ನಾವು ಬರವಣಿಗೆಯಲ್ಲಿ ಮಾಡುತ್ತೇವೆ. ನಮ್ಮ ನಾಯಕರೂ, ಯಾಜಕರೂ, ಲೇವಿಯರೂ ಅದಕ್ಕೆ ಸಹಿ ಮಾಡುವರು ಮತ್ತು ಅದಕ್ಕೆ ಮುದ್ರೆಯನ್ನು ಹಾಕುವರು.

10 ಮುದ್ರೆಹಾಕಿದ ಒಡಂಬಡಿಕೆಯಲ್ಲಿದ್ದ ಹೆಸರುಗಳು: ರಾಜ್ಯಪಾಲನಾದ ನೆಹೆಮೀಯ. ಇವನು
ಹಕಲ್ಯನ ಮಗನು. [2]ಚಿದ್ಕೀಯ, ಸೆರಾಯ, ಅಜರ್ಯ,
ಯೆರೆಮೀಯ, [3]ಪಷ್ಹೂರ್, ಅಮರ್ಯ, ಮಲ್ಕೀಯ,
[4]ಹಟ್ಟೂಷ್, ಶೆಬನ್ಯ, ಮಲ್ಲೂಕ್, [5]ಹಾರೀಮ್,
ಮೆರೇಮೋತ್, ಓಬದ್ಯ, [6]ದಾನಿಯೇಲ್, ಗಿನ್ನೆತೋನ್,
ಬಾರೂಕ್, [7]ಮೆಷುಲ್ಲಾಮ್, ಅಬೀಯ, ಮಿಯ್ಯಾ
ಮೀನ್, [8]ಮಾಜ್ಯ, ಬಿಲ್ಗೈ ಮತ್ತು ಶೆಮಾಯ ಈ ಎಲ್ಲಾ ಯಾಜಕರು ಮುದ್ರೆಹಾಕಿ ಒಡಂಬಡಿಕೆಯಲ್ಲಿ ಹೆಸರು ಬರೆಸಿದವರು.

[9]ಲೇವಿಯರಲ್ಲಿ ಒಡಂಬಡಿಕೆಗೆ ಸಹಿ ಹಾಕಿದವರು:
ಅಜನ್ಯನ ಮಗನಾದ ಯೇಷೂವ, ಹೇನಾದಾದ್‌ನ
ಸಂತತಿಯವನಾದ ಬಿನ್ನೂಯ್, [10]ಕದ್ಮೀಯೇಲ್ ಮತ್ತು
ಅವನ ಸಹೋದರರಾದ ಶೆಬನ್ಯ, ಹೋದೀಯ, ಕೆಲೀಟ,
ಪೆಲಾಯ ಮತ್ತು ಹಾನಾನ್; [11–12]ಮೀಕ, ರೆಹೋಬ್,
ಹಷಬ್ಯ. ಜಕ್ಕೂರ್,ಶೇರೇಬ್ಯ, ಶೆಬನ್ಯ, [13]ಹೋದೀಯ,
ಬಾನೀ, ಮತ್ತು ಬೆನೀನೂ.

[14]ಒಡಂಬಡಿಕೆಗೆ ಸಹಿ ಹಾಕಿದ ನಾಯಕರುಗಳು:
ಪರೋಷ್, ಪಹತ್‌ಮೋವಾಬ್, ಏಲಾಮ್, ಜತ್ತೂ,
ಬಾನೀ, [15]ಬುನ್ನೀ, ಅಜ್ಗಾದ್, ಬೇಬೈ, [16]ಅದೋನೀಯ,
ಬಿಗ್ವೈ, ಆದೀನ್, [17]ಆಟೇರ್, ಹಿಜ್ಕೀಯ, ಆಜ್ಜೂರ್,
[18]ಹೋದೀಯ, ಹಾಷುಮ್, ಬೇಚೈ, [19]ಹಾರೀಫ್,
ಅನಾತೋತ್, ನೇಬೈ, [20]ಮಗ್ಪೀಯಾಷ್, ಮೆಷು
ಲ್ಲಾಮ್, ಹೇಜೀರ್, [21]ಮೆಷೇಜಬೇಲ್, ಚಾದೋಕ್,
ಯದ್ದೂವ, [22]ಪೆಲಟ್ಯ, ಹಾನಾನ್, ಅನಾಯ,
[23]ಹೋಷೇಯ, ಹನನ್ಯ, ಹಷ್ಷೂಬ್, [24]ಹಲೋಹೇಷ,
ಪಿಲ್ಹ, ಶೋಬೇಕ್, [25]ರೆಹೂಮ್, ಹಷಬ್ನ, ಮಾಸೇಯ,
[26]ಅಹೀಯ, ಹಾನಾನ್, ಅನಾನ್, [27]ಮಲ್ಲೂಕ್,
ಹಾರಿಮ್ ಮತ್ತು ಬಾನ.

[28-29]ಹೀಗೆ ಇವರೆಲ್ಲಾ ಯೆಹೋವನಿಗೆ ಒಂದು ವಿಶೇಷವಾದ ವಾಗ್ದಾನವನ್ನು ಮಾಡಿದರು. ತಾವು ವಾಗ್ದಾನವನ್ನು ನೆರವೇರಿಸದೆ ಹೋದಲ್ಲಿ ಸಂಕಟ ಬಾಧೆಗಳು ಪ್ರಾಪ್ತವಾಗುವಂತೆ ಯೆಹೋವನನ್ನು ಕೇಳಿಕೊಂಡರು. ಇವರೆಲ್ಲಾ ದೇವರ ನೀತಿ ನಿಯಮಗಳನ್ನು ಅನುಸರಿಸುತ್ತೇವೆಂದು ಮಾತುಕೊಟ್ಟರು. ಆ ನೀತಿ ನಿಯಮಗಳನ್ನು

ಯೆಹೋವನು ತನ್ನ ಸೇವಕನಾದ ಮೋಶೆಯ ಮೂಲಕ
ನಮಗೆ ಕೊಟ್ಟನು. ಮೇಲೆ ಕಾಣಿಸಿದ ಹೆಸರುಗಳಲ್ಲದೆ
ಉಳಿದ ಜನರು, ಯಾಜಕರು, ಲೇವಿಯರು, ದ್ವಾರ
ಪಾಲಕರು, ಗಾಯಕರು, ದೇವಾಲಯದ ಸೇವಕರು
ಮತ್ತು ಇಸ್ರೇಲಿನ ಜನರು ತಮ್ಮ ಸುತ್ತಲು ವಾಸಿಸುವ ಜನ
ರಿಂದ ಪ್ರತ್ಯೇಕಿಸಲ್ಪಟ್ಟರು. ದೇವರ ವಿಧಿನಿಯಮಗಳನ್ನು
ಅನುಸರಿಸುವುದಕ್ಕಾಗಿ ತಮ್ಮ ಹೆಂಡತಿ ಮಕ್ಕಳೊಂದಿಗೆ
ಪ್ರತ್ಯೇಕಿಸಿಕೊಂಡರು. ದೇವರಿಗೆ ಮಾಡಿದ ಒಡಂಬಡಿಕೆ
ಯನ್ನು ನಡೆಸಿಕೊಡಲು ಒಪ್ಪಿದರು ಮತ್ತು ಹಾಗೆ ಮಾಡ
ದಿದ್ದಲ್ಲಿ ದೇವರಿಂದ ಸಂಕಟ ವ್ಯಾಧಿಗಳನ್ನು ಸ್ವೀಕರಿಸಲೂ
ಒಪ್ಪಿದರು.
30‘‘ನಮ್ಮ ಗಂಡು ಮತ್ತು ಹೆಣ್ಣಮಕ್ಕಳು ನಮ್ಮ
ಸುತ್ತಲಿರುವ ಅನ್ಯರನ್ನು ಮದುವೆಯಾಗಲು ಬಿಡುವು
ದಿಲ್ಲ’’ ಎಂದು ಪ್ರತಿಜ್ಞೆಮಾಡಿದರು.
31‘‘ಸಬ್ಬತ್‌ದಿನದಲ್ಲಿ ಯಾವ ಕೆಲಸವನ್ನೂ ಮಾಡುವು
ದಿಲ್ಲವೆಂದು ಪ್ರಮಾಣಮಾಡುತ್ತೇವೆ. ನಮ್ಮ ಸುತ್ತಮುತ್ತ
ಲಿನ ಜನರು ಸಬ್ಬತ್‌ದಿನದಲ್ಲಿ ಮಾರಲು ದವಸಧಾನ್ಯವ
ನ್ನಾಗಲೀ ಬೇರೆ ವಸ್ತುಗಳನ್ನಾಗಲೀ ತಂದರೆ ನಾವು ಆ
ಸಬ್ಬತ್ ದಿನದಲ್ಲಿ ಮತ್ತು ಇತರ ಯಾವುದೇ ಹಬ್ಬದ ದಿನ
ದಲ್ಲಿ ಅವುಗಳನ್ನು ಕೊಂಡುಕೊಳ್ಳುವುದಿಲ್ಲ. ಪ್ರತಿ
ಏಳನೆಯ ವರ್ಷ ನಾವು ನೆಡುವುದೂ ಇಲ್ಲ. ಹೊಲದಲ್ಲಿ
ಕೆಲಸ ಮಾಡುವುದೂ ಇಲ್ಲ. ನಮಗೆ ಬೇರೆಯವರು ಕೊಡ
ಬೇಕಾಗಿರುವ ಸಾಲವನ್ನು ಏಳನೆಯ ವರ್ಷದಲ್ಲಿ ವಜಾ
ಮಾಡುತ್ತೇವೆ.
32‘‘ದೇವಾಲಯವನ್ನು ನಡಿಸುವ ಖರ್ಚಿನ ಜವಾ
ಬ್ದಾರಿಕೆಯನ್ನು ನಾವು ಹೊರುತ್ತೇವೆ. ನಾವು ಒಂದು ಬೆಳ್ಳಿ
ನಾಣ್ಯವನ್ನು ಪ್ರತಿವರ್ಷ ನಮ್ಮ ದೇವರಿಗೆ ಕಾಣಿಕೆ
ಕೊಡುತ್ತೇವೆ. ಇದು ದೇವಾಲಯದ ಕೆಲಸ ಕಾರ್ಯ
ಗಳಿಗೆ ಉಪಯೋಗಿಸಲ್ಪಡಬೇಕು. 33ಪ್ರತಿದಿನ ದೇವಾಲ
ಯದೊಳಗೆ ಮೇಜಿನ ಮೇಲೆ ಇಡುವ ರೊಟ್ಟಿಗಳಿ
ಗಾಗಿಯೂ ದಿನನಿತ್ಯದ ಸರ್ವಾಂಗಹೋಮಗಳಿಗೂ
ಧಾನ್ಯಸಮರ್ಪಣೆಗೂ ಈ ಹಣವನ್ನು ಉಪಯೋಗಿಸಿರಿ.
ಅಮವಾಸ್ಯೆ, ಸಬ್ಬತ್ ಮತ್ತು ಇತರ ವಿಶೇಷ ಸಭಾ
ಕೂಟಗಳಲ್ಲಿ ಮಾಡುವ ಯಜ್ಞಗಳಿಗಾಗಿ ಈ ಹಣವನ್ನು
ಉಪಯೋಗಿಸಿರಿ. ಇಸ್ರೇಲರನ್ನು ಶುದ್ಧರನ್ನಾಗಿ ಮಾಡುವ
ಪವಿತ್ರ ಯಜ್ಞಗಳಿಗಾಗಿ ಮತ್ತು ಪಾಪಪರಿಹಾರಕ ಯಜ್ಞ
ಗಳಿಗಾಗಿ ಈ ಹಣವನ್ನು ಉಪಯೋಗಿಸಿರಿ. ನಮ್ಮ ದೇವರ
ಆಲಯದ ಯಾವುದಕ್ಕೆ ಬೇಕಾದರೂ ಈ ಹಣವನ್ನು
ಉಪಯೋಗಿಸಿರಿ.
34‘‘ನಾವು ಅಂದರೆ ಯಾಜಕರು, ಲೇವಿಯರು ಮತ್ತು
ಇತರ ಜನರು ಒಟ್ಟಾಗಿ ಸೇರಿ ದೇವಾಲಯದಲ್ಲಿ ಯಜ್ಞ
ಹೋಮಗಳನ್ನರ್ಪಿಸುವುದಕ್ಕೆ ಬೇಕಾದ ಕಟ್ಟಿಗೆಯನ್ನು
ಪ್ರತಿಯೊಂದು ಕುಟುಂಬವು ವರ್ಷಕ್ಕೊಮ್ಮೆ ತಮಗೆ
ನಿಗಿತವಾದ ಸಮಯದಲ್ಲಿ ತಂದು ಒದಗಿಸುವುದಕ್ಕೆ ಚೀಟು
ಹಾಕಿದೆವು. ಧರ್ಮಶಾಸ್ತ್ರದಲ್ಲಿ ಬರೆದಂತೆಯೇ ನಾವು
ಮಾಡಬೇಕಲ್ಲಾ!
35‘‘ನಮ್ಮ ಬೆಳೆಗಳಲ್ಲಿ ಮತ್ತು ಹಣ್ಣಿನ ಮರಗಳಲ್ಲಿ ಬೆಳೆದ
ಪ್ರಥಮ ಫಲಗಳನ್ನೆಲ್ಲಾ ಪ್ರತಿವರ್ಷ ದೇವಾಲಯಕ್ಕೆ
ತಂದು ಅರ್ಪಿಸುವುದಕ್ಕೆ ಒಪ್ಪಿಕೊಂಡೆವು.
36‘‘ಧರ್ಮಶಾಸ್ತ್ರದಲ್ಲಿ ಬರೆದಿರುವ ಪ್ರಕಾರ ನಾವು
ನಮ್ಮ ಚೊಚ್ಚಲು ಮಕ್ಕಳನ್ನು, ಚೊಚ್ಚಲು ದನ, ಕುರಿ,
ಆಡುಗಳನ್ನು ದೇವಾಲಯದಲ್ಲಿ ಸೇವೆಮಾಡುತ್ತಿರುವ
ಯಾಜಕರಿಗೆ ಒಪ್ಪಿಸುವೆವು.
37‘‘ಪ್ರಥಮ ಫಲದ ಹಿಟ್ಟನ್ನು, ಪ್ರಥಮ ಫಲದ ಹಣ್ಣು
ಗಳನ್ನು, ಹೊಸ ದ್ರಾಕ್ಷಾರಸವನ್ನು ಹೊಸ ಎಣ್ಣೆಯನ್ನು
ಯಾಜಕರಿಗೋಸ್ಕರವಾಗಿ ದೇವಾಲಯದ ಉಗ್ರಾಣಗ
ಳಲ್ಲಿ ತಂದಿಡುವೆವು. ನಮ್ಮ ಬೆಳೆಗಳಲ್ಲಿ ಹತ್ತನೆಯ ಒಂದು
ಭಾಗವನ್ನು ಲೇವಿಯರಿಗೆ ತಂದುಕೊಡುವೆವು. ನಾವು
ಕೆಲಸ ಮಾಡುತ್ತಿರುವ ಊರುಗಳಿಂದ ಲೇವಿಯರು
ಇವುಗಳನ್ನು ತೆಗೆದುಕೊಳ್ಳಬೇಕು. 38ನಮ್ಮಿಂದ ಆ ಕಾಣಿಕೆ
ಗಳನ್ನು ಅವರು ಸ್ವೀಕರಿಸುವಾಗ ಆರೋನನ ವಂಶದವ
ರಾದ ಯಾಜಕನೊಬ್ಬನು ಅವರ ಜೊತೆಯಲ್ಲಿ ಇರ
ಬೇಕು. ಲೇವಿಯರು ಆ ಕಾಣಿಕೆಗಳನ್ನು ದೇವಾಲಯಕ್ಕೆ
ತಂದು ಅದರ ಉಗ್ರಾಣಗಳಲ್ಲಿ ಶೇಖರಿಸಿಡಬೇಕು.
39ಇಸ್ರೇಲ್ ಜನರು ಮತ್ತು ಲೇವಿಯರು ತಮ್ಮ ಕಾಣಿಕೆ
ಗಳಾದ ದವಸಧಾನ್ಯ ಹೊಸ ದ್ರಾಕ್ಷಾರಸ, ಎಣ್ಣೆ ಇವು
ಗಳನ್ನು ತಂದು ದೇವಾಲಯದ ಉಗ್ರಾಣಗಳಲ್ಲಿ ಇಡ
ಬೇಕು. ದೇವಾಲಯಕ್ಕೋಸ್ಕರ ಮೀಸಲಾದ ಎಲ್ಲಾ ವಸ್ತು
ಗಳನ್ನು ಆ ಉಗ್ರಾಣಗಳಲ್ಲಿ ಇಡಬೇಕು. ಕೆಲಸದಲ್ಲಿ
ನಿರತರಾಗಿರುವ ಯಾಜಕರು, ಗಾಯಕರು, ದ್ವಾರ
ಪಾಲಕರು ಅಲ್ಲೇ ಇರಬೇಕು.
‘‘ನಮ್ಮ ದೇವರ ಆಲಯವನ್ನು ನಾವು ನೋಡಿ
ಕೊಳ್ಳುವುದಾಗಿ ನಾವೆಲ್ಲರೂ ಪ್ರಮಾಣಮಾಡುತ್ತೇವೆ!’’

### ಜೆರುಸಲೇಮಿನಲ್ಲಿ ವಾಸಿಸಲು ಹೊಸದಾಗಿ ಬಂದವರು

11 ಇಸ್ರೇಲರ ನಾಯಕರುಗಳು ಜೆರುಸಲೇಮ್
ನಗರದೊಳಗೆ ಬಂದು ನೆಲೆಸಿದ್ದರು. ಬೇರೆ
ಯಾರು ಪಟ್ಟಣದೊಳಗೆ ನೆಲೆಸಬಹುದೆಂಬುದನ್ನು
ಉಳಿದ ಇಸ್ರೇಲರು ತೀರ್ಮಾನ ಮಾಡಬೇಕಿತ್ತು. ಆದ್ದ
ರಿಂದ ಚೀಟು ಹಾಕಿದರು. ಹತ್ತು ಮಂದಿಯಲ್ಲಿ ಒಬ್ಬನು
ಪರಿಶುದ್ಧ ನಗರವಾದ ಜೆರುಸಲೇಮಿನಲ್ಲಿ ವಾಸಿಸ
ಬೇಕೆಂದು ಉಳಿದ ಒಂಭತ್ತು ಮಂದಿ ತಮ್ಮ ಸ್ವಂತ ಊರು
ಗಳಲ್ಲಿ ವಾಸಿಸಬಹುದೆಂದು ಇದರಿಂದ ತಿಳಿದುಬಂತು.

[2]ಕೆಲವರು ಜೆರುಸಲೇಮಿನಲ್ಲಿ ವಾಸಿಸುವುದಕ್ಕೆ ತಾವೇ
ಮುಂದೆ ಬಂದರು. ಉಳಿದವರು ತಾವಾಗಿಯೇ ಮುಂದೆ
ಬಂದವರನ್ನು ವಂದಿಸಿ ಆಶೀರ್ವದಿಸಿದರು.

[3]ಜೆರುಸಲೇಮಿನಲ್ಲಿ ವಾಸಿಸಿದ ಪ್ರಾಂತ್ಯಾಧಿಕಾರಿಗಳ
ಪಟ್ಟಿ. (ಕೆಲವು ಇಸ್ರೇಲ್ ಜನರು, ಯಾಜಕರು, ಲೇವಿ
ಯರು, ಆಲಯದ ಸೇವಕರು ಮತ್ತು ಸೊಲೊಮೋನನ
ಸೇವಕರ ಸಂತಾನದವರು ಯೆಹೂದ ಪ್ರಾಂತ್ಯದ ಊರು
ಗಳಲ್ಲಿ ವಾಸಿಸಿದರು. ಇವರೆಲ್ಲರು ತಮ್ಮ ಊರುಗಳಲ್ಲಿದ್ದ
ತಮ್ಮ ಸ್ವಂತ ಸ್ಥಳಗಳಲ್ಲಿ ಜೀವಿಸಿದರು. [4]ಯೆಹೂದ ಮತ್ತು
ಬೆನ್ಯಾಮೀನನ ಕುಟುಂಬಗಳ ಇತರರು ಜೆರುಸಲೇಮ್
ನಗರದಲ್ಲಿ ವಾಸಿಸಿದರು.) ಜೆರುಸಲೇಮಿಗೆ ಬಂದ
ಯೆಹೂದನ ಸಂತಾನದವರು ಯಾರೆಂದರೆ: ಉಜ್ಜೀ
ಯನ ಮಗನಾದ ಅತಾಯ. (ಉಜ್ಜೀಯನು ಜೆಕರ್ಯನ
ಮಗ; ಜೆಕರ್ಯನು ಅಮರ್ಯನ ಮಗ; ಅಮರ್ಯನು
ಶೆಫಟ್ಯನ ಮಗ; ಶೆಫಟ್ಯನು ಮಹಲಲೇಲನ ಮಗ;
ಮಹಲಲೇಲ ಪೆರೆಚನ ಸಂತಾನದವನು.) [5]ಇನ್ನೊಬ್ಬನು
ಬಾರೂಕನ ಮಗನಾದ ಮಾಸೇಯ. (ಬಾರೂಕನು
ಕೊಲ್ಹೋಜೆಯ ಮಗನು; ಕೊಲ್ಹೋಜೆಯು ಹಜಾ ಯನ
ಮಗ; ಹಜಾಯನು ಅದಾಯನ ಮಗ; ಅದಾಯನು
ಯೋಯಾರೀಬನ ಮಗ; ಯೋಯಾರೀಬನು
ಜೆಕರ್ಯನ ಮಗ; ಜೆಕರ್ಯ ಶೇಲಹನ ಸಂತಾನ
ದವನು). [6]ಪೆರೆಚನ ಸಂತಾನಕ್ಕೆ ಸೇರಿದ ಒಟ್ಟು ನಾನೂರ
ಅರವತ್ತೆಂಟು ಮಂದಿ ಜೆರುಸಲೇಮ್ ನಗರದಲ್ಲಿ ವಾಸಿಸಿ
ದರು. ಇವರೆಲ್ಲಾ ಧೈರ್ಯಶಾಲಿಗಳಾದ ವೀರರು.

[7]ಜೆರುಸಲೇಮಿಗೆ ವಾಸಿಸಲು ಬಂದ ಬೆನ್ಯಾಮಿನನ
ಸಂತಾನದವರು ಯಾರೆಂದರೆ: ಮೆಷುಲ್ಲಾಮನ ಮಗ
ನಾದ ಸಲ್ಲು, (ಮೆಷುಲ್ಲಾಮನು ಯೋವೇದನ ಮಗ;
ಯೋವೇದನು ಪೆದಾಯನ ಮಗ; ಪೆದಾಯನು
ಕೋಲಾಯನ ಮಗ; ಕೋಲಾಯನು ಮಾಸೇಯ ಮಗ;
ಮಾಸೇಯು ಈತಿಯೇಲನ ಮಗ; ಈತಿಯೇಲನು
ಯೆಶಾಯನ ಮಗ;) [8]ಗಬ್ಬೈ ಮತ್ತು ಸಲ್ಲು ಎಂಬವರು
ಯೆಶಾಯನನ್ನು ಹಿಂಬಾಲಿಸಿದರು. ಹೀಗೆ ಒಟ್ಟು
ಒಂಬೈನೂರ ಇಪ್ಪತ್ತೆಂಟು ಮಂದಿ. [9]ಜಿಕ್ರಿಯ ಮಗನಾದ
ಯೋವೇಲನು ಅವರಿಗೆ ಮುಖ್ಯಸ್ತನಾಗಿದ್ದನು. ಹಸ್ಸೆನೂ
ವನ ಮಗನಾದ ಯೆಹೂದನು ಜೆರುಸಲೇಮಿನ ಎರಡನೆ
ಜಿಲ್ಲೆಗೆ ಮುಖ್ಯಸ್ತನಾಗಿದ್ದನು. [10]ಜೆರುಸಲೇಮಿನೊಳಗೆ
ವಾಸಿಸಲು ಬಂದ ಯಾಜಕರು ಯಾರೆಂದರೆ:
ಯೋಯಾರೀಬನ ಮಗನಾದ ಯೆದಾಯ, ಯಾಕೀನ್,
[11]ಮತ್ತು ಹಿಲ್ಕೀಯನ ಮಗನಾ ಸೆರಾಯ. (ಹಿಲ್ಕೀಯನು
ಮೆಷುಲ್ಲಾಮನ ಮಗನು; ಮೆಷುಲ್ಲಾಮನು ಚಾದೋಕನ
ಮಗನು; ಚಾದೋಕನು ಮೆರಾಯೋತನ ಮಗನು;
ಮೆರಾಯೋತನು ದೇವಾಲಯದ ಮೇಲ್ವಿಚಾರಕ
ನಾಗಿದ್ದ ಅಹೀಟೂಬನ ಸಂತಾನಕ್ಕೆ ಸೇರಿದವನು.)
[12]ದೇವಾಲಯದೊಳಗೆ ಸೇವೆ ಮಾಡುವ ಎಂಟುನೂರ
ಇಪ್ಪತ್ತೆರಡು ಮಂದಿ, ಮತ್ತು ಯೆರೋಹಾಮನ ಮಗ
ನಾದ ಅದಾಯ. ಯೆರೋಹಾಮನು ಪೆಲಲ್ಯನ ಮಗ;
ಪೆಲಲ್ಯನು ಅಮ್ಜೀಯ ಮಗ; ಅಮ್ಜೀಯು ಜೆಕರ್ಯನ
ಮಗ; ಜೆಕರ್ಯನು ಪಷ್ಹೂರನ ಮಗ; ಪಷ್ಹೂರನು
ಮಲ್ಕೀಯನ ಮಗ. [13]ಮಲ್ಕೀಯನ ವಂಶದ ಒಟ್ಟು
ಜನರು ಇನ್ನೂರ ನಲವತ್ತೆರಡು ಮಂದಿ. ಇವರೆಲ್ಲಾ
ಕುಟುಂಬಗಳ ನಾಯಕರಾಗಿದ್ದರು. ಅಜರೇಲನ ಮಗನು
ಅಮಷ್ಷೈ. (ಅಜರೇಲನು ಅಹಜ್ಜೈಯ ಮಗ; ಅಹಜ್ಜೈಯು
ಮೆಷಿಲ್ಲೇಮೋತನ ಮಗ; ಮೆಷಿಲ್ಲೇ ಮೋತನು
ಇಮ್ಮೇರನ ಮಗ.) [14]ಈ ವಂಶದವರ ಒಟ್ಟು ಸಂಖ್ಯೆ ನೂರ
ಇಪ್ಪತ್ತೆಂಟು ಮಂದಿ. ಇವರೆಲ್ಲಾ ಧೈರ್ಯ ಶಾಲಿಗಳಾದ
ಯುದ್ಧ ಯೋಧರು. ಇವರ ಮುಖ್ಯಸ್ಥನು
ಹಗ್ಗೆದೋಲೀಮನ ಮಗನಾದ ಜಬ್ದೀಯೇಲ.)

[15]ಜೆರುಸಲೇಮಿಗೆ ವಾಸಿಸಲು ಬಂದ ಲೇವಿಯರು
ಹಷ್ಷೂಬನ ಮಗನಾದ ಶೆಮಾಯ; (ಹಷ್ಷೂಬನು
ಅಜ್ರೀಕಾಮನ ಮಗ; ಅಜ್ರೀಕಾಮನು ಹಷಬ್ಯನ ಮಗ;
ಹಷಬ್ಯನು ಬುನ್ನೀಯ ಮಗ.); [16]ಶಬ್ಬೆತೈ ಮತ್ತು
ಯೋಜಾಬಾದ್. (ಇವರಿಬ್ಬರೂ ಲೇವಿಯರ ನಾಯ
ಕರು. ಇವರು ದೇವಾಲಯದ ಹೊರಕೆಲಸಗಳನ್ನು
ನೋಡಿಕೊಳ್ಳುತ್ತಿದ್ದರು. [17]ಮತ್ತನ್ಯ, (ಮತ್ತನ್ಯನು
ಮೀಕನ ಮಗ; ಮೀಕನು ಜಬ್ದೀಯ ಮಗ; ಜಬ್ದೀಯು
ಆಸಾಫನ ಮಗ. ಆಸಾಫನು ಗಾಯಕರ ನಾಯಕನಾಗಿದ್ದು
ಪ್ರಾರ್ಥನೆ ಮತ್ತು ಸ್ತುತಿಗೀತೆಗಳಲ್ಲಿ ಜನರನ್ನು
ನಡೆಸುತ್ತಿದ್ದನು.) ಬಕ್ಬುಕ್ಯ (ಇವನು ತನ್ನ ಸಹೋದರರಲ್ಲಿ
ಎರಡನೆ ಸ್ಥಾನ ಪಡೆದಿದ್ದನು,) ಮತ್ತು ಶಮ್ಮೂವನ ಮಗ
ನಾದ ಅಬ್ದ, (ಶಮ್ಮೂವನು ಗಾಲಾಲನ ಮಗ;
ಗಾಲಾಲನು ಯೆದೂತೂನನ ಮಗ.) [18]ಹೀಗೆ ಒಟ್ಟು
ಇನ್ನೂರ ಎಂಭತ್ತ ನಾಲ್ಕು ಮಂದಿ ಲೇವಿಯರು ಪರಿಶುದ್ಧ
ನಗರದಲ್ಲಿ ವಾಸಿಸಲು ಬಂದರು. [19]ದ್ವಾರಪಾಲಕರಲ್ಲಿ
ಅಕ್ಕೂಬ್, ಟಲ್ಮೋನ್ ಮತ್ತು ಅವರ ನೂರ ಎಪ್ಪತ್ತೆರಡು
ಮಂದಿ ಸಹೋದರರು. ಅವರು ನಗರದ ಬಾಗಿಲುಗಳನ್ನು
ಕಾವಲು ಮಾಡುವವರಾಗಿದ್ದರು.

[20]ಉಳಿದ ಜನರೂ ಯಾಜಕರೂ ಮತ್ತು ಲೇವಿಯರೂ
ಯೆಹೂದದ ಬೇರೆ ಬೇರೆ ಊರು ಪಟ್ಟಣಗಳಲ್ಲಿ
ವಾಸಿಸಿದರು. ತಮ್ಮ ತಮ್ಮ ಪೂರ್ವಿಕರು ನೆಲೆಸಿದ ಸ್ಥಳ
ಗಳಲ್ಲಿಯೇ ನೆಲೆಸಿದರು. [21]ಓಫೇಲ್ ಬೆಟ್ಟದಲ್ಲಿ
ದೇವಾಲಯದ ಸೇವಕರು ವಾಸಿಸಿದರು. ಚೀಹ ಮತ್ತು
ಗಿಷ್ಪ ಅವರ ಮುಖ್ಯಸ್ತರು.

[22]ಮೀಕ ವಂಶಕ್ಕೆ ಸೇರಿದ ಉಜ್ಜೀಯು ಜೆರುಸಲೇಮಿ
ನಲ್ಲಿ ಲೇವಿಯರಿಗೆಲ್ಲಾ ಮುಖ್ಯಸ್ಥನಾಗಿದ್ದನು.

ಉಜ್ಜೀಯು ಬಾನೀಯ ಮಗ. (ಬಾನೀಯು ಹಷಬ್ಯನ
ಮಗ; ಹಷಬ್ಯನು ಮತ್ತನ್ಯನ ಮಗ; ಮತ್ತನ್ಯನು ಮೀಕನ
ಮಗ.) ಉಜ್ಜೀಯು ಆಸಾಫನ ಸಂತಾನಕ್ಕೆ ಸೇರಿದವ
ನಾಗಿದ್ದನು. 23ಗಾಯಕರಾಗಿದ್ದ ಇವರು ದೇವಾಲಯದ
ಸೇವಾಕಾರ್ಯಗಳಲ್ಲಿ ಹಾಡುತ್ತಿದ್ದರು. ಇವರ ಅನು
ದಿನದ ಕರ್ತವ್ಯವನ್ನು ರಾಜನೇ ತಿಳಿಸುತ್ತಿದ್ದನು. ಇವರು
ಅದಕ್ಕೆ ವಿಧೇಯರಾಗುತ್ತಿದ್ದರು. 24ಪೆತಹ್ಯನು ಪ್ರಜೆಗಳ
ವಿಷಯದಲ್ಲಿ ರಾಜನ ಪ್ರತಿನಿಧಿಯಾಗಿದ್ದನು. (ಪೆತಹ್ಯನು
ಮೆಷೇಜಬೇಲನ ಮಗ; ಮೆಷೇಜಬೇಲನು ಜೆರಹನ
ಮಗ; ಜೆರಹನು ಯೆಹೂದನ ಮಗ.)

25ಯೆಹೂದ ಸಂಸ್ಥಾನದ ಜನರು ಈ ಪಟ್ಟಣಗಳಲ್ಲಿ
ವಾಸಿಸಿದರು. ಕಿರ್ಯತರ್ಬ ಮತ್ತು ಸುತ್ತಮುತ್ತಲಿರುವ
ಚಿಕ್ಕ ಪಟ್ಟಣಗಳಲ್ಲಿ ದೀಬೋನ್ ಮತ್ತು ಅದರ
ಸುತ್ತಲಿರುವ ಚಿಕ್ಕ ಪಟ್ಟಣಗಳಲ್ಲಿ ಯಕಬ್ಜೆಯೇಲ್ ಮತ್ತು
ಅದರ ಸುತ್ತಲಿದ್ದ ಚಿಕ್ಕ ಪಟ್ಟಣಗಳಲ್ಲಿ ವಾಸಿಸಿದರು.
26ಅನಂತರ ಯೇಷೂವ, ಮೋಲಾದ, ಬೇತ್ಪಲೆಟ್,
27ಹಚರ್ಷೂವಲ್, ಬೇರ್ಷೆಬ, ಅದರ ಸುತ್ತಲೂ ಇದ್ದ
ಚಿಕ್ಕ ಪಟ್ಟಣಗಳಲ್ಲಿ, 28ಚಿಕ್ಲಗ್, ಮೆಕೋನ, ಮತ್ತು
ಸುತ್ತಲಿದ್ದ ಚಿಕ್ಕ ಪಟ್ಟಣಗಳು 29ಏನ್ರಿಮ್ಮೋನ್, ಚೊರ್ರ,
ಯರ್ಮೂತ್, 30ಜನೋಹ, ಅದುಲ್ಲಾಮ್, ಅದರ
ಸುತ್ತಲಿದ್ದ ಚಿಕ್ಕ ನಗರಗಳು ಲಾಕೀಷ ಅದರ ಸುತ್ತಲಿದ್ದ
ಹೊಲಗಳು ಅಜೇಕ ಅದರ ಸುತ್ತಲಿದ್ದ ಚಿಕ್ಕ ಪಟ್ಟಣಗಳು.
ಹೀಗೆ ಯೆಹೂದ ಪ್ರಾಂತ್ಯದ ಜನರು ಬೇರ್ಷೆಬದಿಂದ
ಹಿಡಿದು ಹಿನ್ನೋಮ್ ಕಣಿವೆಯ ತನಕ ಬೇರೆ ಬೇರೆ
ಪಟ್ಟಣಗಳಲ್ಲಿ ವಾಸಿಸಿದರು.

31ಗೆಬದ ಬೆನ್ಯಾಮೀನ ವಂಶದ ಜನರು
ಮಿಕ್ಮಾಷಿನಲ್ಲಿಯೂ, ಅಯ್ಯಾ, ಬೇತೇಲ್ ಮತ್ತು
ಸುತ್ತಲಿದ್ದ ಸಣ್ಣ ಪಟ್ಟಣಗಳಲ್ಲಿಯೂ ನೆಲೆಸಿದರು.
32ಅನಾತೋತ್ ನೋಬ್ ಮತ್ತು ಅನನ್ಯ,
33ಹಾಚೋರ್, ರಾಮಾ, ಮತ್ತು ಗಿತ್ತಯಿಮ್,
34ಹಾದೀದ್, ಚೆಬೋಯಿಮ್, ಮತ್ತು ನೆಬಲ್ಲಾಟ್,
35ಲೋದ್, ಓನೋ ಮತ್ತು ಗೇಹರಾಷೀಮ್ ಶಿಲ್ಪಿ
ಯವರ ಕಣಿವೆ ಇವುಗಳಲ್ಲಿ ನೆಲೆಸಿದರು. 36ಲೇವಿ ಕುಲದ
ವರಲ್ಲಿ ಕೆಲವು ವರ್ಗಗಳವರು ಬೆನ್ಯಾಮೀನರ ಪ್ರದೇಶಕ್ಕೆ
ಹೋದರು.

### ಯಾಜಕರು ಮತ್ತು ಲೇವಿಯರು

12 ಯೆಹೂದ ಪ್ರಾಂತಕ್ಕೆ ಹಿಂತಿರುಗಿದ ಯಾಜಕರ
ಮತ್ತು ಲೇವಿಯರ ಪಟ್ಟಿ: ಅವರು ಶೆಯಲ್ತಿ
ಯೇಲನ ಮಗನಾದ ಜೆರುಬ್ಬಾಬೆಲ್ ಮತ್ತು ಯೇಷೂವ
ನೊಡನೆ ಹಿಂದಿರುಗಿದರು. ಅವರು ಯಾರೆಂದರೆ:
ಸೆರಾಯ, ಯೆರೆಮೀಯ, ಎಜ್ರ 2ಅಮರ್ಯ,
ಮಲ್ಲೂಕ್, ಹಟ್ಟೂಷ್, 3ಶೆಕನ್ಯ, ರೆಹುಮ್,
ಮೆರೇಮೋತ್, 4ಇದ್ದೋ, ಗಿನ್ನೆತೋನ್, ಅಬೀಯ,
5ಮಿಯ್ಯಾಮೀನ್, ಮಾದ್ಯ, ಬಿಲ್ಗ, 6ಶೆಮಾಯ,
ಯೋಯಾರೀಬ್, ಯೆದಾಯ, 7ಸಲ್ಲೂ, ಅಮೋಕ್,
ಹಿಲ್ಕೀಯ ಮತ್ತು ಯೆದಾಯ. ಇವರೆಲ್ಲಾ ಯಾಜಕರ
ನಾಯಕರು. ಇವರು ಯೇಷೂವನ ಕಾಲದಲ್ಲಿದ್ದವರು.

8ಲೇವಿಯವರು ಯಾರೆಂದರೆ: ಯೇಷೂವ,
ಬಿನ್ನೂಯ, ಕದ್ಮೀಯೇಲ್, ಶೇರೇಬ್ಯ, ಯೆಹೂದ ಮತ್ತು
ಮತ್ತನ್ಯ. ಇವರು ಮತ್ತನ್ಯನಿಗೆ ಸಂಬಂಧಿಕರೂ ಗಾಯಕ
ರಿಗೆ ಮುಖ್ಯಸ್ತರೂ ಆಗಿದ್ದರು.

9ಬಕ್ಬುಕ್ಯ ಮತ್ತು ಉನ್ನೀ ಆ ಲೇವಿಯರ ಸಂಬಂಧಿ
ಕರಾಗಿದ್ದರು. ಕಾರ್ಯಕ್ರಮಗಳಲ್ಲಿ ಇವರು ತಮ್ಮ
ಸಂಬಂಧಿಕರ ಎದುರು ನಿಲ್ಲುತ್ತಿದ್ದರು. 10ಯೇಷೂವನು
ಯೋಯಾಕೀಮನ ತಂದೆ; ಯೋಯಾಕೀಮನು
ಎಲ್ಯಾಷೀಬನ ತಂದೆ; ಎಲ್ಯಾಷೀಬನು ಯೋಯಾದನ
ತಂದೆ; 11ಯೋಯಾದನು ಯೋನಾತಾನನ ತಂದೆ;
ಯೋನಾತಾನನು ಯದ್ದೂವನ ತಂದೆ.

12ಯೋಯಾಕೀಮನ ಕಾಲದಲ್ಲಿ ಇವರು ಯಾಜಕರ
ಕುಟುಂಬಗಳ ನಾಯಕರಾಗಿದ್ದರು.

ಸೆರಾಯ ಕುಟುಂಬದ ನಾಯಕ ಮೆರಾಯ.
ಯೆರೆಮೀಯನ ಕುಟುಂಬದ ನಾಯಕ ಹನನ್ಯ.
13 ಎಜ್ರನ ಕುಟುಂಬದ ನಾಯಕ ಮೆಷುಲ್ಲಾಮ್.
ಅಮರ್ಯನ ಕುಟುಂಬದ ನಾಯಕ
ಯೆಹೋಹಾನಾನ್.
14 ಮಲ್ಲೂಕ್ ಕುಟುಂಬದ ನಾಯಕ
ಯೋನಾತಾನ್. ಶೆಬನ್ಯ ಕುಟುಂಬದ ನಾಯಕ
ಯೋಸೇಫ.
15 ಹಾರಿಮ್ ಕುಟುಂಬದ ನಾಯಕ ಅದ್ನ.
ಮೆರೇಮೋತ್ ಕುಟುಂಬದ ನಾಯಕ ಹೆಲ್ಕೈ
16 ಇದ್ದೋವಿನ ಕುಟುಂಬದ ನಾಯಕ ಜೆಕರ್ಯ.
ಗಿನ್ನೆತೋನನ ಕುಟುಂಬದ ನಾಯಕ
ಮೆಷುಲ್ಲಾಮ್.
17 ಅಬೀಯ ಕುಟುಂಬದ ನಾಯಕ ಜಿಕ್ರೀ.
ಮಿನ್ಯಾಮೀನನ ಮತ್ತು ಮಾದ್ಯಾನ ಕುಟುಂಬದ
ನಾಯಕ ಪಿಲ್ಟೈ
18 ಬಿಲ್ಗಾ ಕುಟುಂಬದ ನಾಯಕ ಶಮ್ಮೂವ.
ಶೆಮಾಯನ ಕುಟುಂಬದ ನಾಯಕ
ಯೆಹೋನಾತಾನ್.
19 ಯೋಯಾರೀಬ್ ಕುಟುಂಬದ ನಾಯಕ
ಮತ್ತೆನೈ. ಯೆದಾಯನ ಕುಟುಂಬದ ನಾಯಕ
ಉಜ್ಜೀ.

20 ಕಲ್ಲೈಯು ಸಲ್ಲೂ ಕುಟುಂಬದ ನಾಯಕ. ಏಬೆರನು ಆಮೋಕ್ ಕುಟುಂಬದ ನಾಯಕ.
21 ಹಷಬ್ಯನು ಹಿಲ್ಕೀಯ ಕುಟುಂಬದ ನಾಯಕ. ನೆತನೇಲನು ಯೆದಾಯನ ಕುಟುಂಬದ ನಾಯಕ.

22ಎಲ್ಯಾಷೀಬ್, ಯೋಯಾದ, ಯೋಹಾನಾನ್
ಮತ್ತು ಯದ್ದೂವ ಇವರ ಕಾಲಗಳಲ್ಲಿದ್ದ ಲೇವಿಯರ
ಮತ್ತು ಯಾಜಕರ ಕುಟುಂಬನಾಯಕರ ಹೆಸರುಗಳನ್ನು
ಪರ್ಶಿಯ ರಾಜನಾದ ದಾರ್ಯವೇಷನ ಆಳ್ವಿಕೆಯಲ್ಲಿ
ಬರೆಯಲಾಯಿತು. 23ಎಲ್ಯಾಷೀಬನ ಮಗನಾದ
ಯೋಹಾನಾನನ ತನಕ ಲೇವಿಕುಲದ ಕುಟುಂಬ
ನಾಯಕರ ಹೆಸರುಗಳನ್ನು ಚರಿತ್ರಾಪುಸ್ತಕದಲ್ಲಿ ದಾಖಲು
ಮಾಡಿಯದೆ. 24ಲೇವಿಯರಲ್ಲಿ ಇವರು ಮುಖಂಡರು:
ಹಷಬ್ಯ, ಶೇರೇಬ್ಯ, ಕದ್ಮೀಯೇಲನ ಮಗನಾದ
ಯೇಷೂವ ಮತ್ತು ಅವನ ಸಹೋದರರು. ಇವರು ತಮ್ಮ
ಸಹೋದರರ ಎದುರು ನಿಂತು ಸ್ತೋತ್ರ ಗೀತೆ ಹಾಡು
ವರು. ಹೀಗೆ ಪರಸ್ಪರ ಹಾಡುವುದು ದೇವರ ಮನುಷ್ಯ
ನಾದ ದಾವೀದನ ಆಜ್ಞೆಯಾಗಿತ್ತು.
25ಬಾಗಿಲುಗಳ ಬಳಿಯಲ್ಲಿದ್ದ ಉಗ್ರಾಣದ ಕೋಣೆ
ಗಳನ್ನು ಕಾಯುತ್ತಿದ್ದವರು ಯಾರೆಂದರೆ: ಮತ್ತನ್ಯ,
ಬಕ್ಬುಕ್ಯ, ಓಬದ್ಯ ಮೆಷುಲ್ಲಾಮ್, ಟಲ್ಮೋನ್ ಮತ್ತು
ಅಕ್ಕೂಬ್. 26ಈ ದ್ವಾರಪಾಲಕರು ಯೋಯಾಕೀಮನ
ಕಾಲದಲ್ಲಿ ಸೇವೆ ಮಾಡಿದರು. ಯೋಯಾಕೀಮನು
ಯೇಷೂವನ ಮಗ. ಯೇಷೂವನು ಯೋಚಾದಾಕನ
ಮಗ. ನೆಹೆಮೀಯನು ರಾಜ್ಯಪಾಲನಾಗಿದ್ದ ದಿನಗಳಲ್ಲಿ
ಮತ್ತು ಎಜ್ರನು ಯಾಜಕನೂ ಉಪದೇಶಕನೂ ಆಗಿದ್ದ
ದಿನಗಳಲ್ಲಿ ಸಹ ಈ ದ್ವಾರಪಾಲಕರು ಸೇವೆ ಸಲ್ಲಿಸಿದರು.

### ಜೆರುಸಲೇಮಿನ ಪೌಳಿಗೋಡೆಯ ಪ್ರತಿಷ್ಠೆ

27ಜನರು ಜೆರುಸಲೇಮಿನ ಪೌಳಿಗೋಡೆಯನ್ನು
ಪ್ರತಿಷ್ಠಿಸಿದರು. ಅವರು ಎಲ್ಲಾ ಲೇವಿಯರನ್ನು ನಗರಕ್ಕೆ
ಕರೆತಂದು ಪ್ರತಿಷ್ಠೆ ಮಾಡಿದರು. ಅವರು ದೇವರಿಗೆ ಸ್ತುತಿ
ಪದಗಳನ್ನು, ತಾಳ, ಸ್ವರಮಂಡಲ, ಕಿನ್ನರಿಗಳನ್ನು
ಬಾರಿಸುತ್ತಾ ಹಾಡಿದರು. 28-29ಜೆರುಸಲೇಮಿನ ಸುತ್ತ
ಮುತ್ತಲಿದ್ದ ಗಾಯಕರೂ ಒಟ್ಟಾಗಿ ಸೇರುತ್ತಿದ್ದರು. ಅವರು
ನೆಟೋಫ, ಬೇತ್ಗ, ಗಿಲ್ಗಾಲ್, ಗೆಬ, ಮತ್ತು ಅಜ್ಮಾವೇತ್
ಎಂಬ ಪಟ್ಟಣಗಳಿಂದ ಬಂದವರಾಗಿದ್ದರು. ಜೆರುಸಲೇ
ಮಿನ ಸುತ್ತಲೂ ಗಾಯಕರು ಸಣ್ಣ ಸಣ್ಣ ಗ್ರಾಮಗಳನ್ನು
ಕಟ್ಟಿಕೊಂಡು ವಾಸವಾಗಿದ್ದರು.
30ಆದ್ದರಿಂದ ಯಾಜಕರೂ ಲೇವಿಯರೂ ಶಾಸ್ತ್ರೋಕ್ತ
ವಾಗಿ ತಮ್ಮನ್ನು ಶುದ್ಧಪಡಿಸಿಕೊಂಡರು. ಅನಂತರ
ಜನರನ್ನೂ ಜೆರುಸಲೇಮಿನ ಗೋಡೆಯನ್ನೂ ಬಾಗಿಲು
ಗಳನ್ನೂ ಶಾಸ್ತ್ರೋಕ್ತವಾಗಿ ಶುದ್ಧಿ ಮಾಡಿದರು.
31ನಾನು ಯೆಹೂದದ ನಾಯಕರಿಗೆ ಗೋಡೆಯ
ಮೇಲೆ ನಿಂತುಕೊಳ್ಳಲು ಹೇಳಿದೆನು. ಅಲ್ಲದೆ ದೇವರಿಗೆ
ಕೃತಜ್ಞತಾಸ್ತುತಿ ಮಾಡಲು ಗಾಯಕರ ಎರಡು ದೊಡ್ಡ
ಗುಂಪುಗಳನ್ನು ಆರಿಸಿಕೊಂಡೆನು. ಒಂದು ಗುಂಪಿನವರು
ಮೆರವಣಿಗೆಯಿಂದ ಬಲಗಡೆಯಿದ್ದ ತಿಪ್ಪೆಬಾಗಿಲಿನ ಕಡೆ
ಹೋದರು. 32ಹೋಷಾಯ ಮತ್ತು ಯೆಹೂದ್ಯರ
ನಾಯಕರಲ್ಲಿ ಅರ್ಧ ಮಂದಿ ಗಾಯಕರನ್ನು ಹಿಂಬಾಲಿ
ಸುತ್ತಾ ಹೋದರು. 33ಅಜರ್ಯ, ಎಜ್ರ, ಮೆಷುಲ್ಲಾಮ್,
34ಯೆಹೂದ, ಬೆನ್ಯಾಮೀನ್, ಶೆಮಾಯ ಮತ್ತು
ಯೆರೆಮೀಯ ಸಹ ಗಾಯಕರನ್ನು ಹಿಂಬಾಲಿಸಿದರು.
35ತುತ್ತೂರಿಗಳನ್ನು ಹಿಡಿದುಕೊಂಡಿದ್ದ ಕೆಲವು
ಯಾಜಕರೂ ಅವರನ್ನು ಹಿಂಬಾಲಿಸುತ್ತಾ ಗೋಡೆಯ
ತನಕ ಬಂದರು. ಜೆಕರ್ಯನೂ ಅವರನ್ನು ಹಿಂಬಾಲಿ
ಸಿದನು. (ಜೆಕರ್ಯನು ಯೋನಾತಾನನ ಮಗ;
ಯೋನಾತಾನನು ಶೆಮಾಯನ ಮಗ; ಶೆಮಾಯನು
ಮತ್ತನ್ಯನ ಮಗ; ಮತ್ತನ್ಯನು ಮೀಕಾಯನ ಮಗ;
ಮೀಕಾಯನು ಜಕ್ಕೂರನ ಮಗ; ಜಕ್ಕೂರನು ಆಸಾಫನ
ಮಗ.) 36ಅಲ್ಲಿ ಆಸಾಫನ ಸಹೋದರರಾದ ಶೆಮಾಯ,
ಅಜರೇಲ್, ಮಿಲಲೈ, ಗಿಲಲೈ, ಮಾಯೈ, ನೆತನೇಲ್,
ಯೆಹೂದ ಮತ್ತು ಹನಾನೀ ಇದ್ದರು. ದೇವಮನುಷ್ಯ
ನಾದ ದಾವೀದನು ತಯಾರಿಸಿದ್ದ ವಾದ್ಯಗಳು ಅವರ ಬಳಿ
ಯಲ್ಲಿದ್ದವು. ಎಜ್ರನು ಗೋಡೆಯನ್ನು ಪ್ರತಿಷ್ಠೆ ಮಾಡಲು
ಒಂದು ತಂಡದ ಜನರನ್ನು ತನ್ನೊಂದಿಗೆ ಕರೆದುಕೊಂಡು
ಹೋದನು. 37ಅವರು ಬುಗ್ಗೆ ಬಾಗಿಲಿನೊಳಗೆ ಪ್ರವೇಶಿಸಿ,
ಮೆಟ್ಟಲುಗಳನ್ನು ಹತ್ತಿ ದಾವೀದ ನಗರದ ತನಕ
ಹೋದರು. ಈಗ ಅವರು ನಗರದ ಗೋಡೆಯನ್ನು ಹತ್ತಿ
ದಾವೀದನ ಮನೆಯ ಮೇಲ್ಗಡೆಯಿಂದ, ‘‘ನೀರು’’ ಎಂಬ
ದ್ವಾರದ ಕಡೆಗೆ ಹೋದರು.
38ಗಾಯಕರ ಇನ್ನೊಂದು ಗುಂಪು ಮೊದಲಿನವರನ್ನು
ಎದುರುಗೊಳ್ಳುವಂತೆ ಎಡಗಡೆಗೆ ತಿರುಗಿದರು. ನಾನು
ಅವರನ್ನು ಹಿಂಬಾಲಿಸುತ್ತಾ ಗೋಡೆಯ ಮೇಲೆ ಬಂದೆನು.
ಅರ್ಧಜನರು ಅವರನ್ನು ಹಿಂಬಾಲಿಸಿ ಕುಲುಮೆಯ
ಬುರುಜು ದಾಟಿ ಅಗಲದ ಗೋಡೆಗೆ ಬಂದರು.
39ಆಮೇಲೆ ಅವರು ಎಫ್ರಾಯಿಮನ ದ್ವಾರ, ಹಳೇ ದ್ವಾರ,
ಮತ್ತು ‘‘ಮೀನು’’ ಎಂಬ ದ್ವಾರ ಇವುಗಳ ಮೇಲೆ
ಹಾದುಹೋದರು. ಅವರು ಹನನೇಲ್ ಬುರುಜು ಮತ್ತು
‘‘ನೂರು’’ ಎಂಬ ಬುರುಜುಗಳ ಮೇಲೆ ಹಾದುಹೋಗಿ
‘‘ಕುರಿ’’ ಎಂಬ ದ್ವಾರದವರೆಗೂ ಹೋದರು. ಅವರು
‘‘ಕಾವಲು ದ್ವಾರ’’ದ ಬಳಿ ನಿಂತರು. 40ಅನಂತರ ಈ
ಎರಡು ಗಾಯನ ವೃಂದದವರು ದೇವಾಲಯದಲ್ಲಿ ತಮಗೆ

ನೇಮಕವಾದ ಸ್ಥಳದಲ್ಲಿನಿಂತರು. ನಾನು ನನ್ನ ಸ್ಥಳದಲ್ಲಿ
ನಿಂತೆನು. ಅರ್ಧಭಾಗ ಅಧಿಕಾರಿಗಳು ದೇವಾಲಯ
ದೊಳಗೆ ತಮ್ಮ ತಮ್ಮ ಸ್ಥಳಗಳಲ್ಲಿ ನಿಂತರು. 41ಯಾಜಕ
ರಾದ ಎಲ್ಯಾಕೀಮ್, ಮಾಸೇಯ, ಮಿನ್ಯಾಮೀನ್,
ಮೀಕಾಯ, ಎಲ್ಯೋವೇನೈ, ಜೆಕರ್ಯ ಮತ್ತು ಹನನ್ಯ
ತುತ್ತೂರಿಗಳನ್ನು ಹಿಡಿದುಕೊಂಡು ತಮ್ಮ ಸ್ಥಳಗಳಲ್ಲಿ
ನಿಂತರು. 42ಆಮೇಲೆ ಮಾಸೇಯ, ಶೆಮಾಯ,
ಎಲ್ಯಾಜಾರ್, ಉಜ್ಜೀ, ಯೆಹೋಹಾನಾನ್ ಮಲ್ಕೀಯ,
ಏಲಾಮ್ ಮತ್ತು ಏಜೆರ್ ಯಾಜಕರು ತಮ್ಮ ಸ್ಥಳಗಳಲ್ಲಿ
ನಿಂತರು.

ಆಮೇಲೆ ಇಜ್ರಹ್ಯನ ನಾಯಕತ್ವದಲ್ಲಿ ಎರಡುಗುಂಪು
ಗಾಯಕರು ಹಾಡಲು ಪ್ರಾರಂಭಿಸಿದರು. 43ಆ ವಿಶೇಷ
ದಿನದಲ್ಲಿ ಯಾಜಕರು ಹೆಚ್ಚಿನ ಸಂಖ್ಯೆಯಲ್ಲಿ ಯಜ್ಞವನ್ನ
ರ್ಪಿಸಿದರು. ಜನರೆಲ್ಲಾ ಸಂತೋಷಪಟ್ಟರು. ದೇವರು
ಅವರಿಗೆಲ್ಲಾ ಅತ್ಯಾನಂದವನ್ನು ಉಂಟುಮಾಡಿದನು;
ಹೆಂಗಸರೂ ಮಕ್ಕಳೂ ಉತ್ಸಾಹದಿಂದ ಆನಂದಿಸಿದರು;
ಜೆರುಸಲೇಮಿನಿಂದ ಹೊರಟ ಅವರ ಹರ್ಷಧ್ವನಿಯು
ಬಹುದೂರದವರೆಗೆ ಕೇಳಿಸಿತು.

44ಉಗ್ರಾಣಕ್ಕೆ ಮುಖ್ಯಸ್ತರನ್ನು ಆ ದಿನ ಆರಿಸಿದರು.
ಜನರು ತಮ್ಮ ಪ್ರಥಮಫಲಗಳನ್ನು ಪೈರಿನ ಹತ್ತನೆಯ
ಒಂದಂಶವನ್ನು ತಂದರು. ಉಗ್ರಾಣದ ಮುಖ್ಯಸ್ತರು
ಅವುಗಳನ್ನು ಕೋಣೆಯೊಳಗೆ ಶೇಖರಿಸಿಟ್ಟರು. ಎಲ್ಲರೂ
ಅಚ್ಚುಕಟ್ಟಾಗಿ ತಮ್ಮ ತಮ್ಮ ಕೆಲಸ ಕಾರ್ಯಗಳನ್ನು ಮಾಡು
ವುದನ್ನು ನೋಡಿ ಜನರು ಸಂತೋಷಪಟ್ಟರು; ಹೆಚ್ಚಾದ
ವಸ್ತುಗಳನ್ನು ಉಗ್ರಾಣದೊಳಕ್ಕೆ ತಂದರು. 45ಯಾಜ
ಕರೂ ಲೇವಿಯರೂ ತಮ್ಮ ದೇವರಿಗೋಸ್ಕರ ತಮ್ಮ
ಕೆಲಸಗಳನ್ನು ಮಾಡಿದರು. ಶುದ್ಧೀಕರಣ ಆಚರಣೆಯ
ಮೂಲಕ ಜನರನ್ನು ಶುದ್ಧರನ್ನಾಗಿ ಮಾಡಿದರು.
ಗಾಯಕರೂ ದ್ವಾರಪಾಲಕರೂ ತಮ್ಮ ತಮ್ಮ ಕೆಲಸಗಳನ್ನು
ಮಾಡಿದರು. ದಾವೀದನು ಮತ್ತು ಸೊಲೊಮೋನನು
ಆಜ್ಞಾಪಿಸಿದ್ದ ಪ್ರಕಾರವೇ ಅವರು ಎಲ್ಲವನ್ನು ಮಾಡಿದರು.
46(ಬಹುಕಾಲದ ಹಿಂದೆ, ದಾವೀದನು ಆಳುತ್ತಿದ್ದಾಗ
ಆಸಾಫನು ಗಾಯಕರಿಗೆ ನಿರ್ದೇಶನಾಗಿದ್ದನು. ಅವನು
ದೇವರಿಗಾಗಿ ಅನೇಕ ಕೃತಜ್ಞತಾಗೀತೆಗಳನ್ನೂ ಸ್ತುತಿ
ಗೀತೆಗಳನ್ನೂ ರಚಿಸಿದ್ದನು.)

47ಜೆರುಬ್ಬಾಬೆಲ್ ಮತ್ತು ನೆಹೆಮೀಯನ ಕಾಲದಲ್ಲಿ
ಇಸ್ರೇಲರೆಲ್ಲರೂ ಗಾಯಕರಿಗೆ ಮತ್ತು ದ್ವಾರಪಾಲಕರಿಗೆ
ಅನುದಿನ ಅಗತ್ಯವಾದವುಗಳನ್ನು ಒದಗಿಸಿಕೊಟ್ಟರು.
ಇತರ ಲೇವಿಯರಿಗೋಸ್ಕರವಾಗಿಯೂ ಜನರು ಹಣ
ವನ್ನು ಪ್ರತ್ಯೇಕವಾಗಿಟ್ಟರು. ಲೇವಿಯರೂ ಸಹ
ಆರೋನನ ವಂಶದ ಯಾಜಕರಿಗಾಗಿ ಹಣವನ್ನು ಪ್ರತ್ಯೇಕ
ವಾಗಿಟ್ಟರು.

## ನೆಹೆಮೀಯನ ಕಡೇ ಆಜ್ಞೆಗಳು

13 ಆ ದಿವಸ ಎಲ್ಲಾ ಜನರಿಗೆ ಕೇಳಿಸುವಂತೆ
ಮೋಶೆಯ ಗ್ರಂಥಗಳನ್ನು ಓದಲಾಯಿತು. ಅದ
ರಲ್ಲಿ ಈ ಆಜ್ಞೆಯು ಬರೆಯಲ್ಪಟ್ಟಿದ್ದನ್ನು ಕಂಡು
ಕೊಂಡರು. ಅದೇನಂದರೆ: ದೇವರ ಸಭೆಯಲ್ಲಿ ಯಾವ
ಅಮ್ಮೋನ್ಯನಾಗಲೀ ಮೋವಾಬ್ಯನಾಗಲೀ ಇರಕೂಡದು.
2ಯಾಕಂದರೆ ಅವರು ಇಸ್ರೇಲರಿಗೆ ಆಹಾರವನ್ನಾಗಲೀ
ನೀರನ್ನಾಗಲೀ ಕೊಟ್ಟಿರಲಿಲ್ಲ. ಅಲ್ಲದೆ ಅವರು ಬಿಳಾಮ
ನಿಗೆ ಹಣಕೊಟ್ಟು ಇಸ್ರೇಲರನ್ನು ಶಪಿಸುವಂತೆ ಮಾಡಿ
ದರು. ಆದರೆ ನಮ್ಮ ದೇವರು ಆ ಶಾಪವನ್ನು ನಮಗೆ
ಆಶೀರ್ವಾದವಾಗುವಂತೆ ಮಾಡಿದರು. 3ಇಸ್ರೇಲರು
ದೇವರ ಕಟ್ಟಳೆಯನ್ನು ಕೇಳಿ ಅದಕ್ಕೆ ವಿಧೇಯರಾದರು.
ಅನ್ಯರ ಸಂತತಿಯವರಿಂದ ತಮ್ಮನ್ನು ಪ್ರತ್ಯೇಕಿಸಿ
ಕೊಂಡರು.

4-5ಆದರೆ ಅದಕ್ಕಿಂತ ಮೊದಲು ಎಲ್ಯಾಷೀಬನು
ದೇವಾಲಯದ ಒಂದು ಕೋಣೆಯನ್ನು ಟೋಬೀಯ
ನಿಗೆ ಕೊಟ್ಟಿದ್ದನು. ಎಲ್ಯಾಷೀಬನು ದೇವಾಲಯದ
ಉಗ್ರಾಣದ ಮುಖ್ಯಸ್ಥನಾಗಿದ್ದನು ಮತ್ತು ಟೋಬೀಯನ
ಪ್ರಾಣ ಸ್ನೇಹಿತನಾಗಿದ್ದನು. ಆ ಕೋಣೆಯಲ್ಲಿ ಧಾನ್ಯ
ಸಮರ್ಪಣೆಯ ಉಳಿದ ಭಾಗ, ಧೂಪ, ದೇವಾಲಯದ
ಪಾತ್ರೆಗಳು, ದಶಮಾಂಸದ ದವಸದಾನ್ಯಗಳು, ಹೊಸ
ದ್ರಾಕ್ಷಾರಸ, ಎಣ್ಣೆ ಇವುಗಳನ್ನೆಲ್ಲಾ ಗಾಯಕರಿಗೂ
ಲೇವಿಯರಿಗೂ ಮತ್ತು ದ್ವಾರಪಾಲಕರಿಗೂ ಕೊಡು
ವುದಕ್ಕಾಗಿ ಅಲ್ಲಿಟ್ಟಿದ್ದರು. ಅಲ್ಲಿ ಯಾಜಕರಿಗೆ ಉಡು
ಗೋರೆಗಳನ್ನು ಸಹ ಇಟ್ಟಿದ್ದರು. ಅದೇ ಕೋಣೆಯನ್ನು
ಎಲ್ಯಾಷೀಬನು ಟೋಬೀಯನಿಗೆ ಕೊಟ್ಟಿದ್ದನು.

6ಇದೆಲ್ಲಾ ನಡೆಯುತ್ತಿರುವಾಗ ನಾನು ಜೆರುಸಲೇಮಿ
ನಲ್ಲಿರಲಿಲ್ಲ. ನಾನು ಬಾಬಿಲೋನಿನ ಅರಸನ ಬಳಿಗೆ
ಹಿಂತಿರುಗಿದ್ದೆನು. ಅರ್ತಷಸ್ತನ ಮೂವತ್ತೆರಡನೆಯ ವರ್ಷ
ದಲ್ಲಿ ನಾನು ಅವನ ಬಳಿಗೆ ಹೋದೆನು. ಸ್ವಲ್ಪಕಾಲವಾದ
ಬಳಿಕ ಅರಸನ ಅಪ್ಪಣೆಯೊಂದಿಗೆ ನಾನು ಹಿಂತಿರುಗಿ
ಜೆರುಸಲೇಮಿಗೆ ಬಂದೆನು. 7ಎಲ್ಯಾಷೀಬನು ಟೋಬೀ
ಯನಿಗೆ ನಮ್ಮ ದೇವರ ಆಲಯದ ಒಂದು ಕೋಣೆಯನ್ನು
ಕೊಟ್ಟನೆಂಬ ದುಃಖದ ವಿಷಯವು ನಾನು ಜೆರುಸಲೇಮಿ
ನಲ್ಲಿದ್ದಾಗ ತಿಳಿಯಿತು. 8ಆಗ ನಾನು ಎಲ್ಯಾಷೀಬನು
ಮಾಡಿದ ಬಗ್ಗೆ ಬಹಳವಾಗಿ ಸಿಟ್ಟುಗೊಂಡೆನು. ಟೋಬೀ
ಯನು ಉಪಯೋಗಿಸುತ್ತಿದ್ದ ಕೋಣೆಯೊಳಗಿದ್ದ ಅವನ
ಸಾಮಾನುಗಳನ್ನೆಲ್ಲಾ ಹೊರಕ್ಕೆಳೆದು ಬಿಸಾಕಿದೆನು. 9ಆ
ಕೋಣೆಗಳನ್ನು ಶುದ್ಧಮಾಡಲು ನಾನು ಆಜ್ಞೆ ಮಾಡಿ
ದೆನು. ಆಮೇಲೆ ದೇವಾಲಯದ ಪಾತ್ರೆಗಳನ್ನು ವಸ್ತು
ಗಳನ್ನು, ಧಾನ್ಯಸಮರ್ಪಣೆಗಳನ್ನು ಮತ್ತು ಧೂಪವನ್ನು ಆ
ಕೋಣೆಯೊಳಗೆ ತಂದಿಟ್ಟೆನು.

10ಲೇವಿಯರಿಗೆ ಸಲ್ಲತಕ್ಕ ಪಾಲನ್ನು ಜನರು ಕೊಡಲಿಲ್ಲ
ವೆಂಬ ಕಾರಣದಿಂದಾಗಿ ಲೇವಿಯರೂ ಗಾಯಕರೂ
ಹೊಲದಲ್ಲಿ ಕೆಲಸ ಮಾಡಲು ತಮ್ಮ ಊರುಗಳಿಗೆ
ಹೊರಟುಹೋದರೆಂಬ ವಿಷಯ ನನಗೆ ತಿಳಿಯಿತು.
11ಆಗ ನಾನು ಅಧಿಕಾರಿಗಳಿಗೆ, ‘‘ನೀವು ದೇವರ ಆಲಯ
ವನ್ನು ನಿರ್ಲಕ್ಷಿಸಿದ್ದೇನು?’’ ಎಂದು ಪ್ರಶ್ನಿಸಿದೆನು.
ಅನಂತರ ನಾನು ಲೇವಿಯರನ್ನು ಒಟ್ಟಾಗಿ ಸೇರಿಸಿ ತಮ್ಮ
ತಮ್ಮ ಸ್ಥಳಗಳಿಗೆ ಹೋಗಿ ತಮಗೆ ನೇಮಕವಾದ ಕರ್ತವ್ಯ
ಪಾಲಿಸುವಂತೆ ಹೇಳಿದೆನು. 12ಆಗ ಯೆಹೂದ ಪ್ರಾಂತದ
ಪ್ರತಿಯೊಬ್ಬರೂ ತಮ್ಮ ದಶಮಾಂಸ ಧಾನ್ಯ, ದ್ರಾಕ್ಷಾರಸ,
ಎಣ್ಣೆ ಮುಂತಾದವುಗಳನ್ನು ತಂದುಕೊಟ್ಟರು. ಅವು
ಗಳನ್ನು ಉಗ್ರಾಣಗಳಲ್ಲಿ ಶೇಖರಿಸಿಡಲಾಯಿತು.

13ಯಾಜಕನಾದ ಶೆಲೆಮ್ಯನನ್ನೂ ಬೋಧಕನಾದ
ಚಾದೋಕನನ್ನೂ ಪೆದಾಯ ಎಂಬ ಲೇವಿಯನನ್ನೂ
ಉಗ್ರಾಣಗಳಿಗೆ ಮುಖ್ಯಸ್ತರನ್ನಾಗಿ ಮಾಡಿದೆನು. ಮತ್ತನ್ಯನ
ಮೊಮ್ಮಗನೂ ಜಕ್ಕೂರನ ಮಗನೂ ಆಗಿರುವ
ಹಾನಾನನ್ನು ಅವರಿಗೆ ಸಹಾಯಕನನ್ನಾಗಿ ನೇಮಿಸಿದೆನು.
ಇವರು ನಂಬಿಗಸ್ತರಾಗಿದ್ದರು. ತಮ್ಮ ಜನರಿಗೆ ಬೇಕಾದ
ದವಸವನ್ನು, ಆಹಾರ ಸಾಮಾಗ್ರಿಗಳನ್ನು ಒದಗಿಸುವ
ಕಾರ್ಯಕ್ಕೆ ಅವರು ಜವಾಬ್ದಾರರಾಗಿದ್ದರು.

14ದೇವರೇ, ನಾನು ಮಾಡಿದ ಈ ಕಾರ್ಯಗಳು ನಿನ್ನ
ನೆನಪಿನಲ್ಲಿರಲಿ. ನಿನ್ನ ಆಲಯಕ್ಕೂ ಅದರ ಸೇವೆಗಳಿ
ಗಾಗಿಯೂ ನಾನು ನಂಬಿಗಸ್ತಿಕೆಯಿಂದ ಮಾಡಿರುವ
ಸೇವೆಯನ್ನೂ ಮರೆಯದಿರು.

15ಆ ದಿವಸಗಳಲ್ಲಿ ಯೆಹೂದದ ಜನರು ಸಬ್ಬತ್
ದಿನದಲ್ಲಿ ಕೆಲಸ ಮಾಡುವುದನ್ನು ನೋಡಿದೆನು. ಅವರು
ದ್ರಾಕ್ಷಿಯನ್ನು ತುಳಿದು ದ್ರಾಕ್ಷಾರಸ ತಯಾರಿಸುತ್ತಿದ್ದರು.
ದವಸಧಾನ್ಯಗಳನ್ನು ಕತ್ತೆಗಳ ಮೇಲೆ ಹೇರಿಸಿಕೊಂಡು
ಹೋಗುತ್ತಿದ್ದರು. ಬೆಳೆಯನ್ನು ಮಾರಲು ಜೆರುಸ
ಲೇಮಿಗೆ ಬರುತ್ತಿದ್ದರು. ನಾನು ಅವರನ್ನು ಕಟುವಾಗಿ
ಎಚ್ಚರಿಸಿ ಇನ್ನು ಮುಂದೆ ಸಬ್ಬತ್ ದಿನದಲ್ಲಿ ಪಟ್ಟಣದೊಳಗೆ
ಏನನ್ನೂ ತರಬಾರದೆಂದು ಆಜ್ಞಾಪಿಸಿದೆನು.

16ಜೆರುಸಲೇಮ್ ನಗರದಲ್ಲಿ ತೂರ್ ದೇಶದ
ಕೆಲವರು ವಾಸಿಸುತ್ತಿದ್ದರು. ಅವರು ಸಬ್ಬತ್ ದಿನದಲ್ಲಿ
ಮೀನು ಮತ್ತು ಇತರ ವಸ್ತುಗಳನ್ನು ನಗರದೊಳಕ್ಕೆ ತಂದು
ಮಾರುತ್ತಿದ್ದರು. ಯೆಹೂದ್ಯರು ಅವರಿಂದ ಕೊಂಡು
ಕೊಳ್ಳುತ್ತಿದ್ದರು. 17ನಾನು ಯೆಹೂದ ಪ್ರಾಂತದ ಗೌರ
ವಸ್ತ ಜನರಿಗೆ, ‘‘ಇದು ತಪ್ಪು, ನೀವು ತಪ್ಪು ಕೆಲಸ ಮಾಡು
ತ್ತಿದ್ದೀರಿ. ನೀವು ಸಬ್ಬತ್ ದಿನವನ್ನು ಅಶುದ್ಧವನ್ನಾಗಿ
ಮಾಡುತ್ತಿದ್ದೀರಿ. ಅದನ್ನು ಸಾಮಾನ್ಯ ದಿನದಂತೆ ಮಾಡು
ತ್ತಿದ್ದೀರಿ. 18ನಮ್ಮ ಪೂರ್ವಿಕರೂ ಇದೇ ರೀತಿ
ಮಾಡಿದರು. ಆ ಕಾರಣದಿಂದ ನಮ್ಮ ದೇವರು ಇಂಥಾ
ತೊಂದರೆ ಗಳನ್ನು ನಮ್ಮ ನಗರಕ್ಕೆ ತಂದೊಡ್ಡಿದನು. ನೀವು
ಸಬ್ಬತ್ ದಿನವನ್ನು ಅಶುದ್ಧಮಾಡಿ ನಿಮ್ಮ ಮೇಲೆ ಇನ್ನೂ
ಹೆಚ್ಚಿನ ಕೋಪವನ್ನು ಬರಮಾಡಿಕೊಳ್ಳುತ್ತಿದ್ದೀರಿ.
ದೇವರು ಇದಕ್ಕಾಗಿ ಭಯಂಕರ ಶಿಕ್ಷೆಯನ್ನು ಕೊಡುವವ
ನಾಗಿದ್ದಾನೆ’’ ಎಂದು ಹೇಳಿದೆನು.

19ಅಲ್ಲದೆ ಶುಕ್ರವಾರ ಸೂರ್ಯಸ್ತಮಾನಕ್ಕಿಂತ ಮುಂಚೆ
ಜೆರುಸಲೇಮಿನ ಬಾಗಿಲಕದಗಳನ್ನು ಮುಚ್ಚಲು ಆಜ್ಞೆ
ಯಿತ್ತೆನು. ಸಬ್ಬತ್‌ದಿನ ಮುಗಿದ ಬಳಿಕವೇ ಅವುಗಳನ್ನು
ತೆರೆಯಲು ಅಪ್ಪಣೆಕೊಟ್ಟೆನು. ದ್ವಾರಗಳ ಬಳಿ ನನ್ನ ಕೆಲವು
ಜನರನ್ನು ನಿಲ್ಲಿಸಿ, ಸಬ್ಬತ್ ದಿನದಲ್ಲಿ ಯಾವ ಮೂಟೆ
ಯನ್ನೂ ನಗರದೊಳಗೆ ತರಲು ಬಿಡಬಾರದು ಎಂದು
ಅವರಿಗೆ ಆಜ್ಞಾಪಿಸಿದೆನು.

20ಒಂದೆರಡು ಬಾರಿ ವ್ಯಾಪಾರಸ್ತರು ನಗರದ ಹೊರ
ಗಡೆಯೇ ರಾತ್ರಿಯಲ್ಲಿ ಉಳಿದುಕೊಳ್ಳಬೇಕಾಯಿತು.
21ನಾನು ಆ ವ್ಯಾಪಾರಸ್ತರಿಗೆ, ‘‘ನೀವು ಬಾಗಿಲಿಗೆದುರಾಗಿ
ನಗರದ ಹೊರಗೆ ರಾತ್ರಿ ಉಳಿದುಕೊಳ್ಳಬಾರದು. ಹಾಗೆ
ಮಾಡಿದ್ದಲ್ಲಿ ನಿಮ್ಮನ್ನು ದಸ್ತಗಿರಿ ಮಾಡಬೇಕಾಗುವದು’’
ಎಂದು ಎಚ್ಚರಿಸಿದೆನು. ಅಂದಿನಿಂದ ಅವರು ಸಬ್ಬತ್
ದಿನದಲ್ಲಿ ನಗರಕ್ಕೆ ವ್ಯಾಪಾರಕ್ಕಾಗಿ ಬರುವುದನ್ನು
ನಿಲ್ಲಿಸಿದರು.

22ಇದಾದ ಬಳಿಕ ತಮ್ಮನ್ನು ಶುದ್ಧಪಡಿಸಿಕೊಳ್ಳಲು
ಲೇವಿಯರಿಗೆ ಆಜ್ಞಾಪಿಸಿದೆನು. ಅವರು ಶುದ್ಧಪಡಿಸಿ
ಕೊಂಡ ಬಳಿಕ ಬಾಗಿಲುಗಳನ್ನು ಕಾಯಲು ಅವರನ್ನು
ಕಳುಹಿಸಿದೆನು. ಯಾಕಂದರೆ ಸಬ್ಬತ್‌ದಿನವು ಪವಿತ್ರ ದಿನ
ವೆಂದು ಎಲ್ಲರೂ ಆಚರಿಸುವಂತೆ ಹೀಗೆ ಮಾಡಿದೆನು.
ದೇವರೇ ನನ್ನ ಈ ಕಾರ್ಯವನ್ನು ನಿನ್ನ ನೆನಪಿನ
ಲ್ಲಿಟ್ಟುಕೋ. ನನ್ನ ಮೇಲೆ ದಯವಿಟ್ಟು ನಿನ್ನ ಪ್ರೀತಿಯನ್ನು
ತೋರಿಸು.

23ಆ ದಿನಗಳಲ್ಲಿ ಕೆಲವು ಮಂದಿ ಯೆಹೂದ್ಯರು
ಅಷ್ಡೋದ್, ಅಮ್ಮೋನ್, ಮೋವಾಬ್ ಊರುಗಳಿಂದ
ಹೆಣ್ಣನ್ನು ತಂದು ಮದುವೆ ಮಾಡಿಕೊಂಡದ್ದು ನನ್ನ ನೆನಪಿಗೆ
ಬಂತು. 24ಅವರಿಗೆ ಹುಟ್ಟಿದ ಮಕ್ಕಳಲ್ಲಿ ಅರ್ಧದಷ್ಟು
ಮಂದಿಗೆ ಯೆಹೂದ್ಯರ ಭಾಷೆಯ ಜ್ಞಾನವೇ ಇರಲಿಲ್ಲ.
ಅವರು ಅಷ್ಡೋದ್, ಅಮ್ಮೋನ್, ಮೋವಾಬ್,
ದೇಶಗಳ ಭಾಷೆಗಳನ್ನಾಡುತ್ತಿದ್ದರು. 25‘‘ನೀವು ತಪ್ಪು
ಕೆಲಸಮಾಡಿದಿರಿ’’ ಎಂದು ಅವರನ್ನು ಶಪಿಸಿದೆನು.
ಕೆಲವರಿಗೆ ಹೊಡೆದೆನು; ಕೆಲವರ ಕೂದಲು ಎಳೆದು ಕಿತ್ತು
ಬಿಟ್ಟೆನು. ದೇವರ ಹೆಸರಿನಲ್ಲಿ ಪ್ರತಿಜ್ಞೆ ಮಾಡಲು ಅವರನ್ನು
ಒತ್ತಾಯಪಡಿಸಿ, ‘‘ನೀವು ಆ ಜನರ ಹೆಣ್ಣು ಮಕ್ಕಳನ್ನು
ಮದುವೆಯಾಗಬಾರದು. ಅನ್ಯರ ಹೆಣ್ಣುಮಕ್ಕಳು ನಿಮ್ಮ
ಗಂಡುಮಕ್ಕಳನ್ನು ಮದುವೆಯಾಗದಂತೆ ನೋಡಿ
ಕೊಳ್ಳಿರಿ.

[26]ಇಂಥಾ ಮದುವೆಗಳಿಂದಾಗಿ ಸೊಲೊಮೋನನು
ಪಾಪಕ್ಕೆ ಒಳಗಾದನು ಎಂಬುದು ನಿಮಗೆ ತಿಳಿಯದೋ?
ಅವನಂಥ ವೈಭವಶಾಲಿ ಅರಸನು ಯಾವ ರಾಜ್ಯ
ದಲ್ಲಿಯೂ ಇರಲಿಲ್ಲ. ದೇವರು ಸೊಲೊಮೋನನನ್ನು
ಪ್ರೀತಿಸಿದನು. ಇಡೀ ಇಸ್ರೇಲಿಗೆ ಅವನನ್ನು ಅರಸನನ್ನಾಗಿ
ಮಾಡಿದನು. ಅಂಥವನೂ ಅನ್ಯ ಸ್ತ್ರೀಯರಿಂದಾಗಿ ಪಾಪ
ಮಾಡಿದನು. [27]ಈಗ ನೀವು ಸಹ ಅನ್ಯಸ್ತ್ರೀಯರನ್ನು
ಮದುವೆಯಾಗಿ ದೇವರಿಗೆ ವಿರುದ್ಧವಾಗಿ ಭಯಂಕರ
ವಾದ ಪಾಪಗಳನ್ನು ಮಾಡುತ್ತಿದ್ದೀರಿ. ನೀವು ದೇವರಿಗೆ
ವಿಧೇಯರಾಗಲಿಲ್ಲ'' ಎಂದು ಹೇಳಿದೆನು.

[28]ಪ್ರಧಾನ ಯಾಜಕನಾದ ಎಲ್ಯಾಷೀಬನ ಮಗನಾದ
ಯೋೕಯಾದನ ಮಕ್ಕಳಲ್ಲಿ ಒಬ್ಬನು ಹೊರೋನಿನ
ಸನ್ಬಲ್ಲಟನಿಗೆ ಅಳಿಯನಾದನು. ನಾನು ಅವನನ್ನು ಆ
ಸ್ಥಳದಿಂದ ಹೊರಗೆ ಓಡಿಸಿಬಿಟ್ಟೆನು.

[29]ನನ್ನ ದೇವರೇ ಆ ಮನುಷ್ಯರನ್ನು ಶಿಕ್ಷಿಸು. ಅವರು
ಯಾಜಕತ್ವವನ್ನು ಹೊಲಸು ಮಾಡಿದ್ದಾರೆ. ಅದನ್ನು
ಅವರು ಸಾಮಾನ್ಯವೆಂದೆಣಿಸಿದ್ದಾರೆ. ಯಾಜಕರೊಂದಿಗೆ
ಮತ್ತು ಲೇವಿಯರೊಂದಿಗೆ ನೀನು ಮಾಡಿದ ಒಡಂಬಡಿಕೆ
ಯನ್ನು ಅವರು ತಿರಸ್ಕರಿಸಿದ್ದಾರೆ. [30]ನಾನು ಯಾಜಕ
ರನ್ನೂ ಲೇವಿಯರನ್ನೂ ಶುದ್ಧರನ್ನಾಗಿ ಮಾಡಿಕೊಳ್ಳು
ವಂತೆ ಆಜ್ಞಾಪಿಸಿದೆನು. ಅವರಲ್ಲಿದ್ದ ಅನ್ಯರನ್ನು ಪರರ
ಬೋಧನೆಗಳನ್ನು ನಾನು ಅವರಿಂದ ತೆಗೆದುಹಾಕಿದೆನು.
ಲೇವಿಯರಿಗೂ ಯಾಜಕರಿಗೂ ಅವರವರ ಕರ್ತವ್ಯ
ಗಳನ್ನೂ ಜವಾಬ್ದಾರಿಕೆಗಳನ್ನೂ ತಿಳಿಸಿದೆನು. [31]ಜನರು
ಕಟ್ಟಿಗೆಯನ್ನೂ ಪ್ರಥಮಫಲಗಳನ್ನೂ ಸರಿಯಾದ
ಸಮಯದಲ್ಲಿ ತರುವಂತೆ ನಾನು ಆಜ್ಞಾಪಿಸಿದೆನು. ನನ್ನ
ದೇವರೇ, ಈ ಒಳ್ಳೆಯ ಕಾರ್ಯಗಳನ್ನೆಲ್ಲಾ ಮಾಡಿದ
ನನ್ನನ್ನು ಮರೆಯಬೇಡ.

# ಎಸ್ತೇರಳು

### ವಷ್ಟಿ ರಾಣಿಯು ರಾಜಾಜ್ಞೆಯನ್ನು ತಿರಸ್ಕರಿಸಿದ್ದು

1 ಅಹಷ್ವೇರೋಷನು ರಾಜನಾಗಿದ್ದಾಗ ನಡೆದ ಘಟನೆ.
ಹಿಂದೂಸ್ಥಾನದಿಂದ ಇಥಿಯೋಪ್ಯದ ತನಕ ನೂರಿ
ಪ್ಪತ್ತೇಳು ಸಂಸ್ಥಾನಗಳನ್ನು ಅವನು ಆಳುತ್ತಿದ್ದನು. 2ಅವನ
ರಾಜ್ಯದ ರಾಜಧಾನಿ ನಗರವಾಗಿದ್ದ ಶೂಷನ್‌ನಲ್ಲಿಯ
ಸಿಂಹಾಸನದಿಂದ ಅರಸನು ರಾಜ್ಯವಾಳುತ್ತಿದ್ದನು.
3ತನ್ನ ಆಳ್ವಿಕೆಯ ಮೂರನೆಯ ವರುಷದಲ್ಲಿ ರಾಜ್ಯದ
ಅಧಿಕಾರಿಗಳಿಗೂ ನಾಯಕರುಗಳಿಗೂ ಒಂದು ಔತಣ
ವನ್ನು ಏರ್ಪಡಿಸಿದನು. ಮೇದ್ಯ ಪರ್ಶಿಯದ ಎಲ್ಲಾ
ಸೈನ್ಯಾಧಿಕಾರಿಗಳೂ ಪ್ರಧಾನರೂ ಔತಣದಲ್ಲಿ ಭಾಗವಹಿ
ಸಿದ್ದರು. 4ಔತಣ ಸಮಾರಂಭವು ನೂರೆಂಭತ್ತು ದಿವಸಗಳ
ತನಕ ಮುಂದುವರೆಯಿತು. ಆ ಸಮಯದಲ್ಲಿ ತನ್ನ
ರಾಜ್ಯದ ಸಕಲ ವೈಭವವನ್ನೂ ಅರಮನೆಯ ಐಶ್ವರ್ಯ
ವನ್ನೂ ಅತಿಥಿಗಳಿಗೆ ಪ್ರದರ್ಶಿಸಿದನು. 5ಆ ನೂರೆಂಭತ್ತು
ದಿವಸಗಳು ಕಳೆದ ಬಳಿಕ ಅಹಷ್ವೇರೋಷನು ಮತ್ತೆ
ಇನ್ನೊಂದು ಔತಣವನ್ನು ಒಂದು ವಾರದ ತನಕ ಮುಂದು
ವರಿಸಿದನು. ಇದು ಅರಮನೆಯ ಒಳ ಉದ್ಯಾನವನದಲ್ಲಿ
ನಡೆಯಿತು. ಇದಕ್ಕೆ ಶೂಷನ್ ನಗರದಿಂದ ಗಣ್ಯರು,
ಸಾಮಾನ್ಯರು ಎಂಬ ಭೇದಭಾವವಿಲ್ಲದೆ ಎಲ್ಲರೂ
ಆಮಂತ್ರಿಸಲ್ಪಟ್ಟಿದ್ದರು. 6ಆ ಒಳ ಉದ್ಯಾನವನವು ಬಿಳಿ
ಮತ್ತು ನೀಲಿ ಬಣ್ಣಗಳ ಬಟ್ಟೆಗಳಿಂದ ಶೃಂಗರಿಸಲ್ಪಟ್ಟಿತ್ತು.
ಅವುಗಳನ್ನು ಬಿಳಿ ಮತ್ತು ನೇರಳೆ ಬಣ್ಣದ ದಾರಗಳಿಂದ
ಬೆಳ್ಳಿಯ ಉಂಗುರಗಳಲ್ಲಿ ಕಟ್ಟಲ್ಪಟ್ಟ ಅಮೃತ ಶಿಲೆಯ
ಕಂಬಗಳಿಗೆ ತೂಗು ಹಾಕಿದ್ದರು. ಬೆಲೆಬಾಳುವ ಕಲ್ಲು
ಗಳಿಂದಲೂ ಮುತ್ತು ಚಿಪ್ಪು, ರತ್ನಶಿಲೆಗಳಿಂದಲೂ
ಅಲಂಕೃತವಾದ ನೆಲದ ಮೇಲೆ ಬೆಳ್ಳಿ ಬಂಗಾರಗಳಿಂದ
ಮಾಡಿದ್ದ ಆಸನಗಳನ್ನಿಟ್ಟಿದ್ದರು. 7ಅತಿಥಿಗಳಿಗೆ ಬಂಗಾರದ
ಪಾನಪಾತ್ರೆಯಲ್ಲಿ ದ್ರಾಕ್ಷಾರಸವನ್ನು ಕುಡಿಯಲು
ಕೊಟ್ಟರು. ಬೇರೆ ಬೇರೆ ವಿಧದ ಪಾತ್ರೆಗಳನ್ನು ಉಪ
ಯೋಗಿಸಲಾಗಿತ್ತು. ರಾಜನ ಔದಾರ್ಯಕ್ಕೆ ತಕ್ಕಂತೆ
ದ್ರಾಕ್ಷಾರಸವು ಧಾರಾಳವಾಗಿ ಹಂಚಲ್ಪಡುತ್ತಿತ್ತು, 8ತಮ್ಮ
ಇಷ್ಟಾನುಸಾರವಾಗಿ ದ್ರಾಕ್ಷಾರಸವನ್ನು ಕುಡಿಯಲು ಅತಿಥಿ
ಗಳಿಗೆ ಕೊಡಬೇಕೆಂದು ಸೇವಕರಿಗೆ ರಾಜಾಜ್ಞೆಯಾಗಿತ್ತು.
ರಾಜಸೇವಕರು ಆ ಆಜ್ಞೆಯನ್ನು ಪಾಲಿಸಿದರು. 9ರಾಜನ
ಅರಮನೆಯಲ್ಲಿ ವಷ್ಟಿರಾಣಿಯೂ ಅದೇ ಪ್ರಕಾರ
ಸ್ತ್ರೀಯರಿಗೂ ಔತಣವನ್ನು ಮಾಡಿಸಿದ್ದಳು.
10-11ಔತಣದ ಏಳನೆಯ ದಿವಸದಲ್ಲಿ ರಾಜನು ದ್ರಾಕ್ಷಾ
ರಸ ಕುಡಿದು ಆನಂದಲಹರಿಯಲ್ಲಿದ್ದಾಗ ತನ್ನ ಆಸ್ಥಾನ
ಕಂಚುಕಿಯರಾದ ಮೆಹೂಮಾನ್, ಬಿಜತಾ,
ಹರ್ಬೋನಾ, ಬಿಗೆತಾ, ಅಬಗೆತಾ, ಜೇತರ್, ಕರ್ಕಸ್
ಎಂಬ ಏಳು ಮಂದಿಗೆ ಹೋಗಿ ವಷ್ಟಿರಾಣಿಯನ್ನು ತನ್ನ
ರಾಜಮುಕುಟವನ್ನು ಧರಿಸಿ ಕರೆತರಲು ಆಜ್ಞಾಪಿಸಿದನು.
ವಷ್ಟಿರಾಣಿಯು ಅತ್ಯಂತ ಸುಂದರಿಯಾಗಿದ್ದಳು. ಆಕೆಯ
ಸೌಂದರ್ಯವನ್ನು ತನ್ನ ರಾಜ್ಯದ ಅಧಿಕಾರಿಗಳಿಗೆ
ತೋರಿಸಬೇಕೆಂಬುದು ಅವನ ಅಪೇಕ್ಷೆಯಾಗಿತ್ತು.
12ಆಸ್ಥಾನಸೇವಕರು ವಷ್ಟಿರಾಣಿಗೆ ರಾಜಾಜ್ಞೆಯನ್ನು
ತಿಳಿಸಿದಾಗ ಆಕೆಯು ಬರಲು ನಿರಾಕರಿಸಿದಳು. ಇದರಿಂದ
ರಾಜನು ಕೋಪೋದ್ರೇಕನಾದನು. 13-14ಕಾನೂನು
ಮತ್ತು ದಂಡನೆಗಳ ಬಗ್ಗೆ ಪರಿಣಿತರಾಗಿದ್ದ ಮಂತ್ರಿಗಳ
ಸಲಹೆ ಕೇಳುವುದು ರಾಜನ ವಾಡಿಕೆಯಾಗಿತ್ತು. ಅದೇ
ಪ್ರಕಾರ ರಾಜನು ತನ್ನ ಸಲಹೆಗಾರರೊಂದಿಗೆ ಈ ವಿಷಯ
ವನ್ನು ಆಲೋಚಿಸಿದನು. ಇವರು ರಾಜನಿಗೆ ನಿಕಟವರ್ತಿಗ
ಳಾಗಿದ್ದರು. ಅವರು ಯಾರೆಂದರೆ ಕರ್ಷೆನಾ, ಶೇತಾರ್,
ಅದ್ಮಾತಾ, ತರ್ಷಿಷ್, ಮೆರೆಸ್, ಮರ್ಸೆನಾ, ಮೆಮೂ
ಕಾನ್ ಎಂಬ ಏಳು ಮಂದಿ ಮೇದ್ಯ ಪಾರಸಿಯ ಪ್ರಮುಖ
ಅಧಿಕಾರಿಗಳು. 15“ಆಸ್ಥಾನ ಸೇವಕರ ಮೂಲಕ ಹೇಳಿ
ಕಳುಹಿಸಿದ ರಾಜಾಜ್ಞೆಯನ್ನು ವಷ್ಟಿರಾಣಿಯು ನಿರಾಕರಿಸಿ
ದ್ದಾಳೆ. ಇಂಥಾ ತಪ್ಪಿಗೆ ಯಾವ ಶಿಕ್ಷೆಯನ್ನು ವಿಧಿಸ
ಬೇಕು?” ಎಂದು ವಿಚಾರಿಸಿದನು.
16ಇತರ ಅಧಿಕಾರಿಗಳು ಆಲಿಸುತ್ತಿದ್ದಾಗ ಮೆಮೂಕಾನ್
ಎದ್ದುನಿಂತು, “ರಾಣಿ ವಷ್ಟಿಯು ತಪ್ಪು ಮಾಡಿದಳು. ರಾಜ
ನಿಗೆ ವಿರುದ್ಧವಾಗಿ ಮಾತ್ರವೇ ಅಲ್ಲ, ರಾಜ್ಯದ ಸಕಲ
ನಾಯಕರಿಗೂ ಸಂಸ್ಥಾನಗಳ ಎಲ್ಲಾ ಜನರಿಗೂ ವಿರುದ್ಧ
ವಾದದ್ದು. 17ಹೇಗೆಂದರೆ; ರಾಣಿಯು ಮಾಡಿದ್ದನ್ನು
ರಾಜ್ಯದ ಇತರ ಸ್ತ್ರೀಯರು ಕೇಳಿ ತಾವೂ ತಮ್ಮ ಗಂಡಂದಿ
ರಿಗೆ ಅವಿಧೇಯರಾಗುವರು. ಅವರು ತಮ್ಮ

ಗಂಡಂದರಿಗೆ, ‘ರಾಜ ಅಹಷ್ವೇರೋಷನು ವಷ್ಟಿರಾಣಿ
ಯನ್ನು ಕರೆದುಕೊಂಡು ಬರಬೇಕೆಂದು ಆಜ್ಞಾಪಿಸಿದನು,
ಆದರೆ ಆಕೆ ಬರಲಿಲ್ಲ’ ಎಂದು ಹೇಳುವರು.
18‘‘ಪರ್ಶಿಯ ಮತ್ತು ಮೇದ್ಯ ನಾಯಕರುಗಳ ಹೆಂಡತಿ
ಯರು ಸಹ ವಷ್ಟಿರಾಣಿ ಈ ಹೊತ್ತು ಮಾಡಿದ್ದನ್ನು ಕೇಳಿ
ದ್ದಾರೆ. ಅವರು ಸಹ ವಷ್ಟಿರಾಣಿಯ ನಡತೆಯಿಂದ
ಪ್ರೋತ್ಸಾಹಿತರಾಗಿ ರಾಜನ ಮುಖ್ಯ ನಾಯಕರುಗ
ಳೊಡನೆ ಅದೇ ರೀತಿ ವರ್ತಿಸುವರು. ಇದರಿಂದಾಗಿ
ಅಗೌರವವೂ ಕೋಪವೂ ತುಂಬಿಕೊಳ್ಳುತ್ತವೆ.
19‘‘ಆದುದರಿಂದ ರಾಜನು ಒಪ್ಪುವುದಾದರೆ ನನ್ನ
ಸಲಹೆ ಏನಂದರೆ, ಅರಸನು ಒಂದು ರಾಜಾಜ್ಞೆಯನ್ನು
ಹೊರಡಿಸಬೇಕು. ಆ ಆಜ್ಞೆಯು ಪರ್ಶಿಯ ಮತ್ತು ಮೇದ್ಯ
ರಾಜಶಾಸನಗಳಲ್ಲಿ ಬರೆಯಲ್ಪಡಬೇಕು. ಪರ್ಶಿಯ
ಮತ್ತು ಮೇದ್ಯ ರಾಜಶಾಸನಗಳು ಎಂದಿಗೂ ಬದಲಾಗು
ವದಿಲ್ಲ. ರಾಜಾಜ್ಞೆಯು ಏನೆಂದರೆ, ಅರಸನಾದ
ಅಹಷ್ವೇರೋಷನ ಸನ್ನಿಧಿಗೆ ರಾಣಿಯು ಪ್ರವೇಶಿಸಲೇ
ಕೂಡದು. ಮಾತ್ರವಲ್ಲ ರಾಜನು ವಷ್ಟಿ ರಾಣಿಯ ಸ್ಥಾನ
ವನ್ನು ಆಕೆಗಿಂತ ಉತ್ತಮಳಾದ ಇನ್ನೊಬ್ಬಾಕೆಗೆ ಕೊಡಲಿ.
20ಈ ರಾಜಶಾಸನವು ವಿಶಾಲ ಸಾಮ್ರಾಜ್ಯದ ಎಲ್ಲಾ
ಕಡೆಗಳಲ್ಲಿ ಪ್ರಕಟಿಸಲ್ಪಟ್ಟಾಗ ಎಲ್ಲಾ ಹೆಂಡತಿಯರು ತಮ್ಮ
ಗಂಡಂದಿರಿಗೆ ಗೌರವವನ್ನು ಸಲ್ಲಿಸುವರು. ಶ್ರೇಷ್ಠರೂ
ಕನಿಷ್ಠರೂ ಆದ ಎಲ್ಲಾ ಸ್ತ್ರೀಯರು ತಮ್ಮ ಗಂಡಂದಿರಿಗೆ
ಗೌರವವನ್ನು ಸಲ್ಲಿಸುವರು.’’
21ಅರಸನೂ ಅವನ ಪ್ರಮುಖ ಅಧಿಕಾರಿಗಳೂ ಈ
ಸಲಹೆಯನ್ನು ಕೇಳಿ ಸಂತೋಷಪಟ್ಟರು. ಮತ್ತು
ಅಹಷ್ವೇರೋಷ ರಾಜನು ಮೆಮೂಕಾನ್ ಹೇಳಿದ ಹಾಗೆ
ಮಾಡಿದನು. 22ಅಹಷ್ವೇರೋಷನು ತನ್ನ ರಾಜ್ಯದ ಎಲ್ಲಾ
ಕಡೆಗಳಿಗೆ, ಎಲ್ಲಾ ಸಂಸ್ಥಾನಗಳಿಗೆ, ಅವರವರ ಭಾಷೆ
ಯಲ್ಲಿ ಪತ್ರಗಳನ್ನು ಬರೆಯಿಸಿ ರವಾನಿಸಿದನು. ಅವರವರ
ಭಾಷೆಯಲ್ಲಿ ಬರೆದ ಪತ್ರದಲ್ಲಿ ಪ್ರತಿಯೊಬ್ಬ ಗಂಡಸು ತನ್ನ
ಸಂಸಾರವನ್ನು ಆಳಬೇಕು ಎಂಬುದಾಗಿ ಬರೆಯಲ್ಪಟ್ಟಿತ್ತು.

## ಎಸ್ತೇರಳನ್ನು ರಾಣಿಯಾಗಿ ಮಾಡಿದ್ದು

2 ಸ್ವಲ್ಪಕಾಲವಾದನಂತರ ಅರಸನ ಕೋಪವು
ಇಳಿಯಿತು. ಆಗ ವಷ್ಟಿಯನ್ನೂ ಆಕೆ ಮಾಡಿದ್ದನ್ನೂ
ಅವಳಿಂದಾಗಿ ತಾನು ಹೊರಡಿಸಿದ ರಾಜಾಜ್ಞೆಯನ್ನೂ
ನೆನಪಿಗೆ ತಂದುಕೊಂಡನು. 2ಆಗ ರಾಜನ ಸನ್ನಿಧಿ
ಸೇವಕರು ಈ ಸಲಹೆ ಕೊಟ್ಟರು: ‘‘ರಾಜನಿಗೋಸ್ಕರ
ರೂಪವತಿಯರಾದ ಕನ್ಯೆಯರನ್ನು ಹುಡುಕಿರಿ. 3ರಾಜನು
ತನ್ನ ಸಾಮ್ರಾಜ್ಯದ ಪ್ರತಿಯೊಂದು ಪ್ರಾಂತ್ಯದಲ್ಲೂ
ನಾಯಕರುಗಳನ್ನು ಆರಿಸಲಿ. ಆ ನಾಯಕರು ಅತ್ಯಂತ
ರೂಪವತಿಯರಾದ ಕನ್ನಿಕೆಯರನ್ನು ಶೂಷನ್ ರಾಜ
ಧಾನಿಗೆ ಕರೆದುಕೊಂಡು ಬಂದು ಅವರನ್ನು ರಾಜನ
ಸ್ತ್ರೀಯರೊಡನೆ ಇರಿಸಲಿ. ಆ ಸ್ತ್ರೀಯರು ಮೇಲ್ವಿಚಾರಕ
ನಾದ ರಾಜನ ಕಂಚುಕಿ ಹೇಗೈಯ ಪರಿಪಾಲನೆಯಲ್ಲಿ ರಲಿ.
ಬಳಿಕ ಅವರಿಗೆ ಸೌಂದರ್ಯವರ್ಧಕ ಚಿಕಿತ್ಸೆ ಕೊಡಲಿ.
4ಅನಂತರ ರಾಜನಿಗೆ ಇಷ್ಟವಾದ ಕನ್ನಿಕೆಯನ್ನು ವಷ್ಟಿಯ
ಬದಲಾಗಿ ರಾಣಿಯನ್ನಾಗಿ ಮಾಡಲಿ’’ ಎಂದು
ಹೇಳಿದರು. ಅವರ ಸಲಹೆ ರಾಜನಿಗೆ ಸರಿಯೆನಿಸಿದ್ದರಿಂದ
ಅವನು ಅದಕ್ಕೆ ಒಪ್ಪಿಕೊಂಡನು.
5ಆ ಸಮಯದಲ್ಲಿ ಬೆನ್ಯಾಮೀನ್ ಕುಲಕ್ಕೆ ಸೇರಿದ
ಮೊರ್ದೆಕೈ ಎಂಬ ಹೆಸರಿನ ಒಬ್ಬ ಯೆಹೂದ್ಯನಿದ್ದನು.
ಇವನು ಯಾಯೀರನ ಮಗನೂ ಕೀಷನ ಮೊಮ್ಮಗನೂ
ಆಗಿದ್ದು ರಾಜಧಾನಿಯಾದ ಶೂಷನ್‌ನಲ್ಲಿಯೇ ವಾಸ
ಮಾಡುತ್ತಿದ್ದನು. 6ಬಾಬಿಲೋನಿನ ಅರಸನಾದ ನೆಬೂಕ
ದ್ನೆಚ್ಚರನು ಜೆರುಸಲೇಮಿನಿಂದ ಮೊರ್ದೆಕೈಯನ್ನು ಸೆರೆ
ಹಿಡಿದು ತಂದಿದ್ದನು. ಯೆಹೂದದ ಅರಸನಾದ
ಯೆಹೋಯಾಕೀನನೊಂದಿಗೆ ಸೆರೆ ಒಯ್ಯಲ್ಪಟ್ಟ ಗುಂಪಿ
ನೊಂದಿಗೆ ಇವನೂ ಇದ್ದನು. 7ಇವನ ಬಳಿಯಲ್ಲಿ ಇವನ
ಚಿಕ್ಕಪ್ಪನ ಮಗಳಾದ ಹದೆಸ್ಸಾ ಎಂಬ ಕನ್ನಿಕೆ ಇದ್ದಳು. ಈಕೆ
ತಂದೆಯೂ ತಾಯಿಯೂ ಇಲ್ಲದ ತಬ್ಬಲಿಯಾಗಿದ್ದಳು.
ಈಕೆಯ ತಂದೆ ತಾಯಿಗಳು ಸತ್ತಂದಿನಿಂದ ಈಕೆಯನ್ನು
ಮೊರ್ದೆಕೈಯು ತನ್ನ ಮಗಳನ್ನಾಗಿ ಸ್ವೀಕರಿಸಿ ಸಾಕುತ್ತಿ
ದ್ದನು. ಹದೆಸ್ಸಾಳನ್ನು ಎಸ್ತೇರ್ ಎಂಬ ಹೆಸರಿನಿಂದಲೂ
ಕರೆಯುತ್ತಿದ್ದರು. ತುಂಬಾ ಸೌಂದರ್ಯವತಿಯಾಗಿದ್ದ
ಈಕೆ ಆಕರ್ಷಕಳಾಗಿದ್ದಳು.
8ರಾಜಾಜ್ಞೆಯು ರಾಜ್ಯದ ಎಲ್ಲಾ ಭಾಗಗಳಲ್ಲಿ ಪ್ರಕಟಿಸ
ಲ್ಪಟ್ಟಾಗ ಅನೇಕ ಕನ್ಯೆಯರನ್ನು ರಾಜಧಾನಿಯಾದ
ಶೂಷನ್‌ಗೆ ಕರೆದುಕೊಂಡು ಬಂದರು. ಇವರನ್ನೆಲ್ಲಾ
ಹೇಗೈಯ ವಶಕ್ಕೆ ಕೊಟ್ಟರು. ಆ ಕನ್ಯೆಯರಲ್ಲಿ ಎಸ್ತೇರಳು
ಸಹ ಒಬ್ಬಳಾಗಿದ್ದಳು. ಎಸ್ತೇರಳನ್ನೂ ಅರಮನೆಗೆ ಕರೆದು
ಕೊಂಡು ಹೋಗಿ ಹೇಗೈಯ ವಶಕ್ಕೆ ಕೊಡಲ್ಪಟ್ಟಳು.
9ಹೇಗೈ ಎಸ್ತೇರಳನ್ನು ಇಷ್ಟಪಟ್ಟನು. ಆಕೆ ಅವನ ಮೆಚ್ಚಿಗೆಗೆ
ಪಾತ್ರಳಾದಳು. ಆಕೆಗೆ ಅರಮನೆಯಿಂದ ಏಳುಮಂದಿ
ಸೇವಕಿಯರನ್ನು ಕೊಟ್ಟು ಆಕೆಯ ಊಟೋಪಚಾರ
ಗಳಲ್ಲಿ ಅಥವಾ ಸೌಂದರ್ಯ ಅಭಿವೃದ್ಧಿಗಾಗಿ ಲೇಪನ
ವಸ್ತುಗಳ ವಿಷಯದಲ್ಲಿ ಹೆಚ್ಚಿನ ಆಸಕ್ತಿ ತೋರಿಸುತ್ತಿದ್ದನು.
ಇದಾದ ಬಳಿಕ ಎಸ್ತೇರ್ ಮತ್ತು ಆಕೆಯ ಸೇವಕಿಯರನ್ನು
ಅಂತಃಪುರದ ಉತ್ತಮ ಭಾಗದಲ್ಲಿ ಇಳಿದುಕೊಳ್ಳುವ
ವ್ಯವಸ್ಥೆ ಮಾಡಿದನು.
10ತಾನು ಯೆಹೂದ್ಯಳು ಎಂದು ಎಸ್ತೇರಳು ಯಾರಿಗೂ
ಹೇಳಲಿಲ್ಲ. ತನ್ನ ವಂಶ, ಮನೆ ತನದ ವಿಚಾರವಾಗಿಯೂ
ಯಾರಿಗೂ ತಿಳಿಸಲಿಲ್ಲ. ಯಾಕಂದರೆ ಮೊರ್ದೆಕೈ ಆಕೆಗೆ
ತನ್ನ ವಿಷಯವಾಗಿ ಯಾರಿಗೂ ಹೇಳಬಾರದೆಂದು

ಕಟ್ಟಪ್ಪಣೆ ಮಾಡಿದ್ದನು. [11]ಪ್ರತಿದಿನ ಮೊರ್ದೆಕೈ ಅಂತಃ
ಪುರದ ಎದುರಿನಿಂದ ಹೋಗುತ್ತಾ ಬರುತ್ತಾ ಎಸ್ತೇರಳು
ಹೇಗಿದ್ದಾಳೆಂದೂ ಅವಳಿಗೆ ಮುಂದೆ ಸಂಭವಿಸುವುದನ್ನೂ
ವಿಚಾರಿಸುತ್ತಿದ್ದನು.
[12]ಸರದಿಯ ಪ್ರಕಾರ ಒಬ್ಬ ಕನ್ಯೆಯನ್ನು ಅರಸನ ಬಳಿಗೆ
ಕರೆದೊಯ್ಯುವ ಮೊದಲು ಆಕೆಯು ಹನ್ನೆರಡು ತಿಂಗಳು
ಕಾಲ ಸೌಂದರ್ಯೋಪಾಸನದ ವಿಧಿಕ್ರಮಗಳನ್ನೆಲ್ಲಾ ನೆರ
ವೇರಿಸಿರಬೇಕು. ಆರುತಿಂಗಳ ಕಾಲ ರಕ್ತಬೋಳದ
ಎಣ್ಣೆಯ ಅಭ್ಯಂಜನದಿಂದಲೂ ನಂತರದ ಆರುತಿಂಗಳು
ಕಾಂತಿವರ್ಧಕ ಲೇಪನ, ಸುಗಂಧ ವಸ್ತುಗಳಿಂದ ಆಕೆಯು
ಸೌಂದರ್ಯದ ಆರೈಕೆ ಮಾಡಿಸಿಕೊಳ್ಳಬೇಕಾಗಿತ್ತು.
[13]ರಾಜನ ಬಳಿಗೆ ಹೋಗುವಾಗ ಆಕೆಗೆ ಏನು ಬೇಕೋ
ಅದನ್ನು ಅಂತಃಪುರದಿಂದ ಕೊಡಲ್ಪಡುತ್ತಿತ್ತು.
[14]ಮುಸ್ಸಂಜೆಯ ಸಮಯದಲ್ಲಿ ಕನ್ಯೆಯು ರಾಜನಿವಾಸ
ವನ್ನು ಪ್ರವೇಶಿಸುವಳು. ಮರುದಿವಸ ಮುಂಜಾನೆ
ಆಕೆಯು ಅಲ್ಲಿಂದ ಹಿಂತಿರುಗಿ ರಾಜನ ಉಪಪತ್ನಿಯರು
ಉಳಿದುಕೊಳ್ಳುವ ಅಂತಃಪುರದ ಇನ್ನೊಂದು ಭಾಗದಲ್ಲಿ
ನೆಲೆಸುವಳು. ಅಲ್ಲಿ ಆಕೆ ರಾಜನ ಕಂಚುಕಿ ಶವಷ್ಗಜನ
ಮೇಲ್ವಿಚಾರಣೆಯಲ್ಲಿರುವಳು. ಶವಷ್ಗಜನನು ರಾಜನ
ಉಪಪತ್ನಿಗಳ ಮೇಲ್ವಿಚಾರಕನಾಗಿದ್ದನು. ರಾಜನು
ಆಕೆಯ ಹೆಸರೆತ್ತಿ ಕರೆದಾಗ ಮಾತ್ರವೇ ಆಕೆಯು ತಿರುಗಿ
ರಾಜನ ಬಳಿಗೆ ಹೋಗುವಳು. ಕರೆಯದಿದ್ದಲ್ಲಿ ಆಕೆಯು
ಅಲ್ಲಿಯೇ ಇರುವಳು.
[15]ರಾಜನ ಬಳಿಗೆ ಹೋಗಲು ಎಸ್ತೇರಳ ಸರದಿ ಬಂದಾಗ
ಆಕೆ ಏನನ್ನೂ ಕೇಳಿಕೊಳ್ಳಲಿಲ್ಲ. ತಾನು ಏನನ್ನು ತೆಗೆದು
ಕೊಂಡು ಹೋಗಬೇಕೆಂದು ರಾಜನ ಸ್ತ್ರೀಯರ ಮೇಲ್ವಿ
ಚಾರಕನಾಗಿದ್ದ ರಾಜಕಂಚುಕಿ ಹೇಗೈನನ್ನು ಮಾತ್ರ ಕೇಳಿ
ದಳು. (ಎಸ್ತೇರಳು ಮೊರ್ದೆಕೈಯ ಚಿಕ್ಕಪ್ಪ ಅಬೀಹೈಲನ
ಮಗಳು, ತನ್ನ ಸಾಕು ಮಗಳು ಆಗಿದ್ದಳು.) ಎಸ್ತೇರಳನ್ನು
ನೋಡಿದವರೆಲ್ಲರೂ ಆಕೆಯನ್ನು ಮೆಚ್ಚುತ್ತಿದ್ದರು.
[16]ಹೀಗೆ ಹತ್ತನೇ ತಿಂಗಳಾದ ಟೇಬೇತ್ ಮಾಸದಲ್ಲಿ
ರಾಜನ ಏಳನೇ ವರುಷದಲ್ಲಿ ಎಸ್ತೇರಳು ಅಹಷ್ವೇ
ರೋಷನ ರಾಜನಿವಾಸಕ್ಕೆ ಕರೆದೊಯ್ಯಲ್ಪಟ್ಟಳು.
[17]ಎಲ್ಲಾ ಕನ್ಯೆಯರಿಗಿಂತ ರಾಜನು ಎಸ್ತೇರಳನ್ನು ಬಹಳ
ವಾಗಿ ಪ್ರೀತಿಸಿದನು. ಆಕೆ ಅವನ ಮೆಚ್ಚಿಕೆಗೆ ಪಾತ್ರಳಾದಳು.
ಎಲ್ಲಾ ಕನ್ಯೆಯರಲ್ಲಿ ಅವಳನ್ನು ಮಾತ್ರ ರಾಜನು ಹೆಚ್ಚಾಗಿ
ಇಷ್ಟಪಟ್ಟನು. ಅರಸನಾದ ಅಹಷ್ವೇರೋಷನು ರಾಜ
ಕಿರೀಟವನ್ನು ಆಕೆಯ ತಲೆಯ ಮೇಲಿರಿಸಿ ವಷ್ಟಿಯ ಬದ
ಲಾಗಿ ಎಸ್ತೇರಳನ್ನು ತನ್ನ ರಾಣಿಯನ್ನಾಗಿ ಮಾಡಿದನು.
[18]ಎಸ್ತೇರಳಿಗೆ ರಾಜನು ಒಂದು ದೊಡ್ಡ ಔತಣವನ್ನೇ
ರ್ಪಡಿಸಿ ಅದಕ್ಕೆ ರಾಜ್ಯದ ಮುಖ್ಯ ಅಧಿಕಾರಿಗಳನ್ನೂ
ನಾಯಕರನ್ನೂ ಆಮಂತ್ರಿಸಿ, ರಾಜ್ಯದಲ್ಲೆಲ್ಲಾ ಒಂದು
ದಿವಸದ ರಜೆಯನ್ನು ಘೋಷಿಸಿದನು; ಮತ್ತು ಜನರಿಗೆ
ಉದಾರವಾಗಿ ದಾನಧರ್ಮಗಳನ್ನು ಮಾಡಿದನು.

### ರಾಜಹತ್ಯೆಯ ಒಳಸಂಚನ್ನು ಮೊರ್ದೆಕೈ ಬಯಲುಪಡಿಸಿದ್ದು

[19]ಕನ್ಯೆಯರು ಎರಡನೇ ಸಾರಿ ಕೂಡಿಸಲ್ಪಡುವಾಗ
ಮೊರ್ದೆಕೈಯು ಅರಮನೆಯ ಹೆಬ್ಬಾಗಿಲಲ್ಲಿ ಕುಳಿತು
ಕೊಂಡಿದ್ದನು. [20]ಮೊರ್ದೆಕೈ ಎಸ್ತೇರಳಿಗೆ ಹೇಳಿದ ಮೇರೆಗೆ
ಆಕೆ ತನ್ನ ಪೂರ್ವಿಕರ ದೇಶದ ಬಗ್ಗೆಯಾಗಲೀ ತನ್ನ
ಕುಟುಂಬದ ಹಿನ್ನಲೆಯ ಬಗ್ಗೆಯಾಗಲೀ ಯಾರಿಗೂ
ಹೇಳಲಿಲ್ಲ. ಹಿಂದೆ ಆಕೆ ಹೇಗೆ ಮೊರ್ದೆಕೈ ಹೇಳಿದ ಪ್ರಕಾರ
ನಡೆದುಕೊಳ್ಳುತ್ತಿದ್ದಳೋ ಹಾಗೆಯೇ ಈಗಲೂ ನಡೆದು
ಕೊಳ್ಳುತ್ತಿದ್ದಳು.
[21]ಮೊರ್ದೆಕೈ ಅರಮನೆಯ ಹೆಬ್ಬಾಗಿಲ ಬಳಿ ಕುಳಿತು
ಕೊಂಡಿದ್ದ ಸಮಯದಲ್ಲಿ ಒಂದು ವಿಷಯ ನಡೆಯಿತು.
ಬಿಗೆತಾನ್ ಮತ್ತು ತೆರೆಷ್ ಎಂಬ ಇಬ್ಬರು ದ್ವಾರಪಾಲ
ಕರು ಅರಸನ ಮೇಲೆ ಕೋಪಗೊಂಡು ಅವನನ್ನು
ಕೊಲ್ಲಲು ಒಳಸಂಚು ಮಾಡುತ್ತಿದ್ದರು. [22]ಮೊರ್ದೆಕೈಗೆ ಈ
ವಿಷಯ ಗೊತ್ತಾದಾಗ ಅವನು ಎಸ್ತೇರಳಿಗೆ ತಿಳಿಸಿದನು.
ಎಸ್ತೇರ್ ರಾಣಿಯು ಇದನ್ನು ಕೂಡಲೇ ಅರಸನಿಗೆ
ತಿಳಿಸಿದಳು. ಅಷ್ಟೇ ಅಲ್ಲ ಮೊರ್ದೆಕೈ ಎಂಬವನು ಈ ಒಳ
ಸಂಚನ್ನು ಕಂಡುಹಿಡಿದು ತನಗೆ ತಿಳಿಸಿದನು ಎಂಬ
ದಾಗಿಯೂ ಅರಸನಿಗೆ ವರದಿ ಮಾಡಿದಳು. [23]ಕೂಡಲೇ
ವಿಚಾರಣೆ ನಡೆಸಿದಾಗ ಮೊರ್ದೆಕೈಯು ಹೇಳಿದ
ವಿಷಯವು ಸತ್ಯ ಎಂದು ಗೊತ್ತಾಯಿತು. ಆ ಎರಡು ದ್ವಾರ
ಪಾಲಕರನ್ನು ಹಿಡಿದು ಗಲ್ಲಿಗೇರಿಸಿದರು. ಈ ಎಲ್ಲಾ
ಸಮಾಚಾರವನ್ನು ರಾಜನ ಬಳಿಯಲ್ಲಿರುವ ರಾಜಕಾಲ
ವೃತ್ತಾಂತ ಪುಸ್ತಕದಲ್ಲಿ ಬರೆಯಲ್ಪಟ್ಟವು.

### ಯೆಹೂದ್ಯರನ್ನು ನಿರ್ಮೂಲನ ಮಾಡಲು ಹಾಮಾನನ ಸಂಚು

3 ಇದಾದ ಬಳಿಕ ರಾಜನಾದ ಅಹಷ್ವೇರೋಷನು
ಹಾಮಾನನನ್ನು ಗೌರವಿಸಿದನು. ಹಾಮಾನನು
ಹಮ್ಮೆದಾತನೆಂಬವನ ಮಗನು. ಇವನು ಅಗಾಗನ ವಂಶಕ್ಕೆ
ಸೇರಿದವನಾಗಿದ್ದನು. ಅರಸನು ಹಾಮಾನನನ್ನು ಉನ್ನತ
ಸ್ಥಾನಕ್ಕೆ ನೇಮಿಸಿ ಬೇರೆ ಅಧಿಕಾರಿಗಳಿಗಿಂತ ವಿಶೇಷವಾದ
ಗೌರವವನ್ನು ಕೊಡಿಸಿದನು. [2]ರಾಜ್ಯದ ಎಲ್ಲಾ ಅಧಿಕಾರಿ
ಗಳೂ ಅರಮನೆಯ ಹೆಬ್ಬಾಗಿಲ ಬಳಿಯಲ್ಲಿದ್ದವರೆಲ್ಲರೂ
ಅವನಿಗೆ ಅಡ್ಡಬೀಳುತ್ತಿದ್ದರು. ಇದು ರಾಜಾಜ್ಞೆಯಾಗಿತ್ತು.
ಆದರೆ ಮೊರ್ದೆಕೈ ಮಾತ್ರ ಅವನಿಗೆ ಅಡ್ಡಬೀಳಲೂ ಇಲ್ಲ
ಗೌರವಿಸಲೂ ಇಲ್ಲ. [3]ಅರಮನೆಯ ಹೆಬ್ಬಾಗಿಲ ಬಳಿ
ಯಲ್ಲಿದ್ದ ಅಧಿಕಾರಿಗಳು, ‘‘ಮೊರ್ದೆಕೈ, ಅರಸನ ಆಜ್ಞೆಯ

ಪ್ರಕಾರ ಹಾಮಾನನಿಗೆ ನೀನು ಏಕೆ ಬಗ್ಗಿ
ನಮಸ್ಕರಿಸುವುದಿಲ್ಲ?'' ಎಂದು ಪ್ರಶ್ನಿಸಿದರು.
4ಪ್ರತಿದಿನ ಆ ಅಧಿಕಾರಿಗಳು ಮೊರ್ದೆಕೈಗೆ ಹೇಳಿದರೂ
ಅವನು ಹಾಮಾನನಿಗೆ ಅಡ್ಡಬೀಳಲೂ ಇಲ್ಲ. ಗೌರವಿ
ಸಲೂ ಇಲ್ಲ. ಈ ವಿಷಯವನ್ನು ಅಧಿಕಾರಿಗಳು ಹಾಮಾನ
ನಿಗೆ ತಿಳಿಸಿದರು. ಅವನು ಮೊರ್ದೆಕೈಗೆ ಏನನ್ನು ಮಾಡು
ವನು ಎಂದು ಅವರಿಗೆ ತಿಳಿಯಬೇಕಾಗಿತ್ತು. ಮೊರ್ದೆ
ಕೈಯು ಅವರಿಗೆ ತಾನು ಯೆಹೂದ್ಯನೆಂದು ತಿಳಿಸಿದ್ದನು.
5ಮೊರ್ದೆಕೈ ತನಗೆ ಅಡ್ಡಬೀಳದಿರುವುದರಿಂದ ಮತ್ತು
ಗೌರವಿಸದಿರುವುದರಿಂದ ಹಾಮಾನನು ಬಹಳ ಕೋಪ
ಗೊಂಡನು. 6ಮೊರ್ದೆಕೈ ಯೆಹೂದ್ಯ ಜನಾಂಗಕ್ಕೆ ಸೇರಿದ
ವನೆಂದು ಹಾಮಾನನಿಗೆ ತಿಳಿದುಬಂತು. ಬರೇ ಮೊರ್ದೆಕೈ
ಯನ್ನು ಮಾತ್ರವೇ ಕೊಲ್ಲದೆ ಅಹಷ್ವೇರೋಷನ
ಸಾಮ್ರಾಜ್ಯದಲ್ಲಿರುವ ಎಲ್ಲಾ ಯೆಹೂದ್ಯರನ್ನು ಕೊಲ್ಲುವ
ಹಂಚಿಕೆಯನ್ನು ಹೂಡಿದನು.

7ಅಹಷ್ವೇರೋಷನ ಆಳ್ವಿಕೆಯ ಹನ್ನೆರಡನೆಯ
ವರುಷದ ಮೊದಲನೆ ತಿಂಗಳಾದ ನೀಸಾನ್ ತಿಂಗಳಲ್ಲಿ
ಒಂದು ನಿರ್ದಿಷ್ಟ ದಿವಸಕ್ಕಾಗಿ ಹಾಮಾನನು ಚೀಟು ಹಾಕಿ
ದನು. ಆಗ ಹನ್ನೆರಡನೆ ತಿಂಗಳಾದ ಆದಾರ್ ಮಾಸವನ್ನು
ಆರಿಸಲ್ಪಡಲಾಯಿತು. (ಆ ದಿವಸಗಳಲ್ಲೂ ಚೀಟು
ಹಾಕುವದಕ್ಕೆ ''ಪೂರ್'' ಎಂದು ಅನ್ನುತ್ತಿದ್ದರು.)
8ಹಾಮಾನನು ಅರಸನಾದ ಅಹಷ್ವೇರೋಷನ ಬಳಿಗೆ
ಬಂದು, ''ಅರಸನೇ, ನಿನ್ನ ಸಾಮ್ರಾಜ್ಯದ ಎಲ್ಲಾ ಸಂಸ್ಥಾನ
ಗಳಲ್ಲಿ ಒಂದು ಜನಾಂಗದವರು ಹಬ್ಬಿರುತ್ತಾರೆ. ಇವರು
ಇತರ ಎಲ್ಲಾ ಜನರಿಂದ ಪ್ರತ್ಯೇಕವಾಗಿ ಇರುತ್ತಾರೆ. ಅವರ
ನೀತಿ ರೀತಿಗಳೆಲ್ಲಾ ಬೇರೆ ಜನರಿಂದ ವಿಭಿನ್ನವಾಗಿರುತ್ತದೆ.
ಅವರು ರಾಜನ ಕಟ್ಟಳೆಗೆ ವಿಧೇಯರಾಗುವುದಿಲ್ಲ. ನಿನ್ನ
ರಾಜ್ಯದಲ್ಲಿ ಅವರು ಹೀಗೆಯೇ ಇರುವದು ಒಳ್ಳೆಯದಲ್ಲ.
9''ರಾಜನೇ, ನೀನು ಸಮ್ಮತಿಸುವದಾದರೆ ನನ್ನ ಸಲಹೆ
ಏನಂದರೆ, ಆ ಜನರನ್ನು ನಿರ್ಮೂಲ ಮಾಡಲು ಅಪ್ಪಣೆ
ಕೊಡು. ನಾನು ಹತ್ತು ಸಾವಿರ ಬೆಳ್ಳಿನಾಣ್ಯಗಳನ್ನು ರಾಜ
ಖಜಾನೆಯಲ್ಲಿ ಹಾಕುವೆನು. ಆ ಹಣವನ್ನು ಆ ಕಾರ್ಯ
ಮಾಡುವ ಜನರ ಸಂಬಳಕ್ಕಾಗಿ ವಿನಿಯೋಗಿಸಬಹುದು.''

10ಆಗ ಅರಸನು ತನ್ನ ಮುದ್ರೆಯುಂಗುರವನ್ನು ಬೆರಳಿ
ನಿಂದ ತೆಗೆದು ಹಾಮಾನನಿಗೆ ಕೊಟ್ಟನು. ಹಾಮಾನನು
ಅಗಾಗನ ವಂಶದವನಾದ ಹಮ್ಮೆದಾತನ ಮಗನು. ಈ
ಹಾಮಾನನು ಯೆಹೂದ್ಯರ ಕಡುವೈರಿಯಾಗಿದ್ದನು.
11ಅರಸನು ಹಾಮಾನನಿಗೆ, ''ನಿನ್ನ ಹಣವು ನಿನ್ನ ಹತ್ರವೇ
ಇರಲಿ. ಆ ಜನರನ್ನು ನಿನಗೆ ಇಷ್ಟ ಬಂದ ಹಾಗೆ ಮಾಡ
ಬಹುದು'' ಅಂದನು.

12ಮೊದಲನೆ ತಿಂಗಳಿನ ಹದಿಮೂರನೇ ದಿವಸದಂದು
ರಾಜಲೇಖಕರನ್ನು ಕರೆಯಿಸಿ ಹಾಮಾನನ ಆಜ್ಞೆಯನ್ನು
ಆಯಾ ಭಾಷೆಗಳಲ್ಲಿ ಬರೆಯಿಸಿದನು. ರಾಜನ ಸಂಸ್ಥಾನಾ
ಧಿಕಾರಿಗಳಿಗೆ, ರಾಜ್ಯಪಾಲರಿಗೆ ಮತ್ತು ವಿವಿಧ ಜನಾಂಗದ
ಅಧಿಕಾರಿಗಳಿಗೆ ಅರಸನಾದ ಅಹಷ್ವೇರೋಷನ ಹೆಸರಿ
ನಲ್ಲಿ ಬರೆದು ಅದಕ್ಕೆ ರಾಜನ ಮುದ್ರೆಯನ್ನೊತ್ತ
ಲಾಯಿತು. 13ರಾಜಾಜ್ಞೆಯನ್ನು ಹೊತ್ತ ಸಂದೇಶ
ವಾಹಕರು ದೇಶದ ಎಲ್ಲಾ ಕಡೆಗಳಲ್ಲಿ ಹೊತ್ತುಕೊಂಡು
ಬಂದರು. ಆ ಪತ್ರದಲ್ಲಿ ಹನ್ನೆರಡನೇ ತಿಂಗಳಿನ ಹದಿ
ಮೂರನೇ ದಿವಸದಂದು ಆಯಾ ಪ್ರಾಂತ್ಯಗಳಲ್ಲಿರುವ
ಎಲ್ಲಾ ಯೆಹೂದ್ಯರನ್ನು ಚಿಕ್ಕವರು ದೊಡ್ಡವರು ಎನ್ನದೆ
ಕೊಂದು ಅವರ ವಸ್ತುಗಳನ್ನೆಲ್ಲ ಸೂರೆ ಮಾಡಬೇಕೆಂಬ
ದಾಗಿ ಬರೆದಿತ್ತು.

14ಈ ಪತ್ರದ ಒಂದೊಂದು ಪ್ರತಿಯು ಪ್ರತಿಯೊಂದು
ಸಂಸ್ಥಾನದಲ್ಲಿ ರಾಜವಿಧಿಯೆಂದು ಎಲ್ಲಾ ಜನರಲ್ಲಿ
ಪ್ರಕಟಿಸಲ್ಪಡಬೇಕು ಅಲ್ಲದೆ ಆ ದಿನಕ್ಕಾಗಿ ಎಲ್ಲಾ ಜನರೂ
ಸಿದ್ಧರಾಗಿರಬೇಕೆಂಬುದಾಗಿ ಬರೆದಿತ್ತು. 15ರಾಜನ
ಆಜ್ಞೆಯ ಪ್ರಕಾರ ಸಂದೇಶವಾಹಕರು ದೇಶದೇಶಗಳಿಗೆ
ಚದರಿದರು. ರಾಜಧಾನಿಯಾದ ಶೂಷನ್ ನಗರದಲ್ಲೂ
ಆ ಸಂದೇಶವನ್ನು ಪ್ರಕಟಿಸಲಾಯಿತು. ಅರಸನೂ
ಹಾಮಾನನೂ ಮದ್ಯಪಾನ ಮಾಡಲು ಕುಳಿತರು. ಆದರೆ
ರಾಜಧಾನಿಯಲ್ಲಿನ ಜನರು ಗಲಿಬಿಲಿಗೊಂಡಿದ್ದರು.

## ಎಸ್ತೇರಳು ಸಹಾಯ ಮಾಡಲು ಮೊರ್ದೆಕೈಯ ಒತ್ತಾಯ

4 ನಡೆದ ಎಲ್ಲಾ ಸಂಗತಿಗಳನ್ನು ಮೊರ್ದೆಕೈ ಕೇಳಿ
ಕೊಂಡನು. ಯೆಹೂದ್ಯರನ್ನೆಲ್ಲಾ ಕೊಲ್ಲಲು
ರಾಜಾಜ್ಞೆ ಹೊರಟಿದೆ ಎಂದು ಕೇಳಿದಾಗ ಅವನು ತನ್ನ
ಬಟ್ಟೆಗಳನ್ನು ಹರಿದುಕೊಂಡು ಶೋಕದ ಬಟ್ಟೆಗಳನ್ನು
ಧರಿಸಿ ತಲೆಯ ಮೇಲೆ ಬೂದಿಯನ್ನು ಸುರಿದು
ಕೊಂಡನು. ಆಮೇಲೆ ಗಟ್ಟಿಯಾಗಿ ಅಳುತ್ತಾ ನಗರ ಬೀದಿ
ಗಳಲ್ಲಿ ನಡೆದನು. 2ಅವನು ಶೋಕವನ್ನು ಸೂಚಿಸುವ
ಬಟ್ಟೆಗಳನ್ನು ಧರಿಸಿದ ಕಾರಣ ಅರಮನೆಯ ಹೆಬ್ಬಾಗಿಲ
ತನಕ ಮಾತ್ರವೇ ಅವನಿಗೆ ಹೋಗಲು ಸಾಧ್ಯವಾಯಿತು.
ಅರಮನೆಯ ಪ್ರಾಕಾರದೊಳಗೆ ಶೋಕವಸ್ತ್ರವನ್ನು ಧರಿಸಿ
ಯಾರೂ ಹೋಗುವ ಹಾಗಿಲ್ಲ. 3ಪ್ರತಿಯೊಂದು ಸಂಸ್ಥಾನ
ದಲ್ಲೂ ರಾಜನ ಆಜ್ಞೆ ಪ್ರಕಟಿಸಲ್ಪಟ್ಟಾಗ ಯೆಹೂದ್ಯ
ರೊಳಗೆ ಕೂಗಾಟವೂ ದುಃಖವೂ ತುಂಬಿತು. ಉಪವಾಸ
ಮಾಡುತ್ತಾ ಅವರು ಗಟ್ಟಿಯಾಗಿ ರೋಧಿಸಿದರು. ಎಷ್ಟೋ
ಮಂದಿ ಯೆಹೂದ್ಯರು ಶೋಕವಸ್ತ್ರಗಳನ್ನು ಧರಿಸಿ ತಲೆಗೆ
ಬೂದಿ ಸುರಿದು ನೆಲದ ಮೇಲೆ ಬಿದ್ದುಕೊಂಡು
ಗಟ್ಟಿಯಾಗಿ ಅತ್ತರು.

4ಎಸ್ತೇರಳ ಸೇವಕಿಯರು ಮತ್ತು ಕಂಚುಕಿಯರು
ಮೊರ್ದೆಕೈ ವಿಚಾರವಾಗಿ ಆಕೆಗೆ ತಿಳಿಸಿದರು. ಇದನ್ನು ಕೇಳಿ
ಎಸ್ತೇರ್ ರಾಣಿಗೆ ತುಂಬಾ ಗಲಿಬಿಲಿಯೂ ದುಃಖವೂ

ಆಯಿತು. ಆಕೆ ಅವನಿಗೋಸ್ಕರ ಬಟ್ಟೆಯನ್ನು ಕಳುಹಿಸಿ
ಶೋಕದ ಬಟ್ಟೆಯನ್ನು ತೆಗೆದು ಹಾಕಲು ಹೇಳಿಸಿದಳು.
ಆದರೆ ಅವನು ಅವಳ ಬಟ್ಟೆಯನ್ನು ಸ್ವೀಕರಿಸಲಿಲ್ಲ. 5ಆಗ
ಎಸ್ತೇರಳು ಹತಾಕನನ್ನು ಬರಹೇಳಿದಳು. ಹತಾಕನು ರಾಜ
ಕಂಚುಕಿಯಾಗಿದ್ದು ಎಸ್ತೇರ್ ರಾಣಿಯ ಸೇವೆಯನ್ನು
ಮಾಡುವವನಾಗಿದ್ದನು. ಹತಾಕನಿಗೆ ಹೋಗಿ ಮೊರ್ದೆಕೈಗೆ
ಏನು ತೊಂದರೆಯಾಯಿತು; ಅವನು ಯಾತಕ್ಕಾಗಿ ದುಃಖ
ತಪ್ತನಾಗಿದ್ದಾನೆ' ಎಂಬುದನ್ನು ವಿಚಾರಿಸಿಕೊಂಡು ಬರಲು
ಆಜ್ಞಾಪಿಸಿದಳು. 6ಅರಮನೆಯ ಹೆಬ್ಬಾಗಿಲ ಎದುರಿ
ನಲ್ಲಿದ್ದ ಬಯಲಿನಲ್ಲಿ ಮೊರ್ದೆಕೈಯನ್ನು ಹತಾಕನು
ಸಂಧಿಸಿದಾಗ 7ಮೊರ್ದೆಕೈ ನಡೆದ ಸಂಗತಿಗಳನ್ನೆಲ್ಲಾ
ಹೇಳಿದನು. ಮತ್ತು ಹಾಮಾನನು ರಾಜನಿಗೆ ಯೆಹೂದ್ಯ
ರನ್ನು ಕೊಲ್ಲಿಸಲು ಆಜ್ಞೆ ಹೊರಡಿಸಿದ್ದುದಕ್ಕಾಗಿ ಕೊಟ್ಟ
ಹಣದ ಸರಿಯಾದ ಮೊತ್ತವನ್ನು ತಿಳಿಸಿದನು. 8ಯೆಹೂದ್ಯ
ರನ್ನು ಕೊಲ್ಲಬೇಕೆಂಬುವ ಅರಸನ ಆಜ್ಞಾಪತ್ರದ ಒಂದು
ಪ್ರತಿಯನ್ನು ಹತಾಕನ ಕೈಯಲ್ಲಿ ಮೊರ್ದೆಕೈ ಕೊಟ್ಟನು. ಈ
ಆಜ್ಞಾಪತ್ರವನ್ನು ಶೂಷನ್ ನಗರದ ಎಲ್ಲೆಡೆಯಲ್ಲಿಯೂ
ಕಳುಹಿಸಲ್ಪಟ್ಟಿತ್ತು. ಹತಾಕನು ಆ ಪ್ರತಿಯನ್ನು ಎಸ್ತೇರಳಿಗೆ
ತೋರಿಸಿ ಎಲ್ಲವನ್ನು ವಿವರಿಸಬೇಕೆಂದು ಮೊರ್ದೆಕೈ
ಉದ್ದೇಶಿಸಿದನು. ಅಷ್ಟೇ ಅಲ್ಲ, ಎಸ್ತೇರ್ ರಾಣಿ ಅರಸನ
ಬಳಿಗೆ ಹೋಗಿ ತನಗೂ ಆಕೆಯ ಜನರಿಗೂ ದಯೆ
ತೋರಿಸಲು ಅರಸನೊಡನೆ ಬೇಡಲಿ ಎಂದು
ಹತಾಕನೊಡನೆ ಹೇಳಿ ಕಳುಹಿಸಿದನು.

9ಹತಾಕನು ಹಿಂತಿರುಗಿ ಹೋಗಿ ಎಸ್ತೇರಳಿಗೆ ಮೊರ್ದೆಕೈ
ಹೇಳಿದ್ದೆಲ್ಲವನ್ನು ತಿಳಿಸಿದನು.

10ಎಸ್ತೇರಳು ಹತಾಕನಿಗೆ ಮೊರ್ದೆಕೈ ಹತ್ತಿರ ಹೋಗಿ
ಹೀಗೆ ಹೇಳು: 11“ಮೊರ್ದೆಕೈ, ಸಾಮ್ರಾಜ್ಯದಲ್ಲಿರುವ
ಎಲ್ಲಾ ಅಧಿಕಾರಿಗಳಿಗೂ ಪ್ರಜೆಗಳಿಗೂ ತಿಳಿದಿರುವ
ಒಂದು ವಿಷಯವೇನಂದರೆ, ರಾಜನು ಕರೆಯದೆ ಯಾರಾ
ದರೂ ಆತನ ಬಳಿಗೆ ಹೋದರೆ ಅದಕ್ಕೆ ಮರಣ
ದಂಡನೆಯೇ ಶಿಕ್ಷೆ ಎಂಬದು. ರಾಜನು ತನ್ನ ಬಂಗಾರದ
ದಂಡವನ್ನು ಯಾರ ಮೇಲೆ ತೋರಿಸುವನೋ ಅವನು
ಮರಣಶಿಕ್ಷೆಯಿಂದ ಪಾರಾಗುವನು. ಈಗ ರಾಜನು
ನನ್ನನ್ನು ಕರೆದು ಮೂವತ್ತು ದಿವಸಗಳಾದವು.”

12-13ಎಸ್ತೇರಳ ಸಂದೇಶವು ಮೊರ್ದೆಕೈಗೆ ತಲುಪಿತು.
ಅದಕ್ಕುತ್ತರವಾಗಿ ಮೊರ್ದೆಕೈ ಹೀಗೆ ಹೇಳಿ ಕಳುಹಿಸಿದನು:
“ಎಸ್ತೇರಳೇ, ನೀನು ಅರಮನೆಯಲ್ಲಿ ವಾಸವಾಗಿರುವದ
ರಿಂದ ಸಾಮೂಹಿಕ ಹತ್ಯೆಯಿಂದ ನೀನೊಬ್ಬಳೇ ಯೆಹೂದಿ
ಪಾರಾಗುವಿ ಎಂದು ನೆನೆಸಬೇಡ. 14ನೀನು ಈಗ ಸುಮ್ಮನಿ
ದ್ದರೆ ಯೆಹೂದ್ಯರಿಗೆ ಸಹಾಯವೂ ಸ್ವಾತಂತ್ರವೂ ಬೇರೆ
ದಿಕ್ಕಿನಿಂದ ಬರುವವು. ಆದರೆ ನೀನೂ ನಿನ್ನ ತಂದೆಯ
ಬಳಗದವರೆಲ್ಲರೂ ಸಾಯುವರು. ಇಂಥ ಸಮಯದಲ್ಲಿ
ನೀನು ರಾಣಿಯಾಗಿ ಆಯ್ಕೆಯಾದದ್ದು ಇದಕ್ಕೋಸ್ಕ
ರವೋ ಎಂದು ಯಾರಿಗೆ ಹೇಳಲು ಸಾಧ್ಯ?”

15-16ಆಗ ಎಸ್ತೇರಳು ಈ ಉತ್ತರವನ್ನು ಮೊರ್ದೆಕೈಗೆ
ಕಳುಹಿಸಿದಳು. “ಮೊರ್ದೆಕೈ, ನೀನು ಹೋಗಿ ಶೂಷನ್
ನಲ್ಲಿರುವ ಎಲ್ಲಾ ಯೆಹೂದ್ಯರನ್ನು ಒಟ್ಟಿಗೆ ಸೇರಿಸಿ ನನ
ಗಾಗಿ ಉಪವಾಸವಿರಲು ಅವರಿಗೆ ಹೇಳು. ಮೂರು ದಿನ
ಹಗಲು ರಾತ್ರಿ ಊಟ ಮಾಡಲೂಬಾರದು ಕುಡಿಯಲೂ
ಬಾರದು. ನಾನೂ ನಿಮ್ಮ ಹಾಗೆ ಉಪವಾಸದಿಂದಿರುವೆನು.
ನನ್ನೊಂದಿಗೆ ನನ್ನ ಸೇವಕಿಯರೂ ಉಪವಾಸ ಮಾಡು
ವರು. ನಾವು ಉಪವಾಸ ಮಾಡಿದ ಬಳಿಕ ನಾನು ರಾಜನ
ಬಳಿಗೆ ಹೋಗುವೆನು. ಆತನು ಕರೆಯದೆ ನಾನು ಆತನ
ಬಳಿಗೆ ಹೋಗುವುದು ನ್ಯಾಯಬಾಹಿರ. ಆದರೂ ನಾನು
ಹೋಗುವೆನು, ನಾನು ಸಾಯಬೇಕಾದರೆ ಸಾಯುವೆನು.”

17ಮೊರ್ದೆಕೈ ಹೊರಟು ಹೋಗಿ ಎಸ್ತೇರಳು ಹೇಳಿದ
ಪ್ರಕಾರ ಮಾಡಿದನು.

### ಎಸ್ತೇರಳು ರಾಜನನ್ನು ಸಂದರ್ಶಿಸಿದ್ದು

5 ಮೂರನೇ ದಿವಸದಲ್ಲಿ ಎಸ್ತೇರಳು ವಿಶೇಷ ಬಟ್ಟೆ
ಗಳನ್ನು ಧರಿಸಿ ಅರಸನ ಅರಮನೆಯ ಒಳಾಂಗಣ
ದಲ್ಲಿ ನಿಂತುಕೊಂಡಳು. ಅದು ರಾಜ ದರ್ಬಾರಿನ ಮುಂದೆ
ಇತ್ತು. ರಾಜನು ಸಿಂಹಾಸನದ ಮೇಲೆ, ಪ್ರಜೆಗಳು
ಪ್ರವೇಶಿಸುವ ಬಾಗಿಲಿಗೆ ಎದುರಾಗಿ ಕುಳಿತಿದ್ದನು.
2ಅರಸನು ಒಳಾಂಗಣದಲ್ಲಿ ನಿಂತಿದ್ದ ಎಸ್ತೇರಳನ್ನು ಕಂಡ
ಕೂಡಲೇ ಆಕೆಯನ್ನು ಮೆಚ್ಚಿಕೊಂಡು ತನ್ನ ಕೈಯಲ್ಲಿದ್ದ
ರಾಜದಂಡವನ್ನು ಆಕೆಯ ಕಡೆಗೆ ಚಾಚಿದನು. ಆಗ
ಎಸ್ತೇರಳು ಒಳಾಂಗಣವನ್ನು ಪ್ರವೇಶಿಸಿ ರಾಜನ ಬಳಿ
ಹೋದಳು ಮತ್ತು ರಾಜದಂಡದ ತುದಿಯನ್ನು ತನ್ನ
ಬೆರಳಿನಿಂದ ಮುಟ್ಟಿದಳು.

3“ಎಸ್ತೇರ್ ರಾಣಿಯೇ, ನಿನ್ನ ಮನಸ್ಸನ್ನು ಏನು
ಬಾಧಿಸುತ್ತದೆ? ನನ್ನನ್ನು ಏನು ಕೇಳಲು ಬಂದಿರುವಿ?
ಕೇಳು, ನಾನು ನಿನಗೆ ನನ್ನ ಅರ್ಧರಾಜ್ಯವನ್ನು ಕೇಳಿದರೂ
ಕೊಡುವೆನು” ಎಂದು ರಾಜನು ಅಂದನು.

4ಅದಕ್ಕೆ ಎಸ್ತೇರಳು, “ನಾನು ಒಂದು ಔತಣವನ್ನು
ಸಿದ್ಧಪಡಿಸಿರುತ್ತೇನೆ ಅದಕ್ಕೆ ನೀವೂ, ಹಾಮಾನನೂ
ಬರಬೇಕು ಎಂದು ವಿನಂತಿಸುತ್ತೇನೆ” ಎಂದಳು.

5ಆಗ ಅರಸನು, “ಹಾಮಾನನ್ನು ಬೇಗನೇ ಕರೆಯಿಸಿರಿ,
ಎಸ್ತೇರಳು ಹೇಳಿದಂತೆ ನಾವು ಮಾಡುವೆವು” ಅಂದನು.
ಹಾಗೆ ಅರಸನೂ ಹಾಮಾನನೂ ಎಸ್ತೇರಳು ಅವರಿಗಾಗಿ
ಮಾಡಿದ ಔತಣಕ್ಕೆ ಹೋದರು. 6ಅವರು ದ್ರಾಕ್ಷಾರಸ
ವನ್ನು ಸೇವಿಸುತ್ತಿರುವಾಗ ರಾಜನು ಎಸ್ತೇರಳನ್ನು ತಿರಿಗಿ
ವಿಚಾರಿಸಿದನು. “ನೀನು ನನ್ನನ್ನು ಏನು ಕೇಳ
ಬೇಕೆಂದಿದ್ದೀ? ಏನು ಬೇಕಾದರೂ ಕೇಳು. ನಾನು

ಕೊಡುತ್ತೇನೆ. ಹೇಳು, ಏನುಬೇಕು? ನನ್ನ ಅರ್ಧ ರಾಜ್ಯ
ವನ್ನು ಕೇಳಿದರೂ ನಾನು ಕೊಡುತ್ತೇನೆ'' ಅಂದನು.
[7]ಅದಕ್ಕೆ ಎಸ್ತೇರಳು, ''ನನ್ನ ಬಿನ್ನಹವೇನಂದರೆ:
[8]ರಾಜನು ಸಮ್ಮತಿಸುವದಾದರೆ ಮತ್ತು ನಾನು ಕೇಳಿ
ಕೊಳ್ಳುವುದನ್ನು ಕೊಡಲು ರಾಜನಿಗೆ ಇಷ್ಟವಾದರೆ, ನಾಳೆ
ನಾನು ಇನ್ನೊಂದು ಔತಣ ಸಮಾರಂಭವನ್ನು ಏರ್ಪಡಿಸು
ತ್ತೇನೆ. ಅದಕ್ಕೆ ನೀವೂ ಹಾಮಾನನೂ ಬರಬೇಕು. ಆಗ
ನಾನು ನನಗೇನು ಬೇಕೆಂದು ತಿಳಿಸುವೆನು'' ಅಂದಳು.

### ಮೊರ್ದೆಕೈ ಮೇಲೆ ಹಾಮಾನನ ರೋಷ

[9]ಹಾಮಾನನು ಹರ್ಷ ತುಂಬಿದವನಾಗಿ ರಾಜ ಸನ್ನಿಧಿ
ಯಿಂದ ತನ್ನ ಮನೆಗೆ ತೆರಳಿದನು. ಆದರೆ ಹೆಬ್ಬಾಗಿಲ
ಬಳಿಯಲ್ಲಿ ಮೊರ್ದೆಕೈಯನ್ನು ನೋಡಿದಾಗ ಅವನ
ಮೇಲೆ ಹಾಮಾನನ ಕೋಪ ಉಕ್ಕಿ ಬಂತು. ಯಾಕಂದರೆ
ಮೊರ್ದೆಕೈ ಹಾಮಾನನಿಗೆ ಯಾವ ಗೌರವವನ್ನೂ ಕೊಟ್ಟಿರ
ಲಿಲ್ಲ. ಮತ್ತು ಅವನಿಗೆ ಭಯಪಡಲಿಲ್ಲ. ಇದು ಹಾಮಾ
ನನ್ನು ಸಿಟ್ಟಿಗೇರುವಂತೆ ಮಾಡಿತು. [10]ಆದರೆ ಹಾಮಾನನು
ತನ್ನ ಕೋಪವನ್ನು ಹಿಡಿತದಲ್ಲಿಟ್ಟುಕೊಂಡು ತನ್ನ ಮನೆಗೆ
ಹೋದನು. ಅಲ್ಲಿ ತನ್ನ ಸ್ನೇಹಿತರನ್ನೂ, ತನ್ನ ಹೆಂಡತಿ
ಯಾದ ಜೆರೆಷಳನ್ನೂ ಕರೆದು [11]ತನ್ನ ಸಂಪತ್ತಿನ ವಿಷಯ
ಕೊಚ್ಚಿಗೊಂಡನು. ತನ್ನ ಸ್ನೇಹಿತರಲ್ಲಿ ತನ್ನ ಮಕ್ಕಳ ವಿಚಾರ
ವಾಗಿ ಹೆಗ್ಗಳಿಕೆಯಿಂದ ಮಾತಾಡುತ್ತಿದ್ದನು. ಮಾತ್ರವಲ್ಲದೆ
ಅರಸನು ತನ್ನನ್ನು ಅತ್ಯುನ್ನತ ಸ್ಥಾನಕ್ಕೆ ಏರಿಸಿ ಇತರ ಎಲ್ಲಾ
ನಾಯಕರುಗಳ ಮೇಲೆ ನೇಮಿಸಿದನು. [12]''ಅಷ್ಟೇ ಅಲ್ಲ''
ಹಾಮಾನನು ಮುಂದುವರಿಸುತ್ತಾ, ''ಎಸ್ತೇರ್ ರಾಣಿಯು
ಅರಸನೊಡನೆ ನನ್ನೊಬ್ಬನನ್ನೇ ಕರೆದು ಔತಣ
ಮಾಡಿಸಿದಳು. ನಾಳೆಯ ಔತಣ ಸಮಾರಂಭಕ್ಕೂ ಅರಸ
ನೊಡನೆ ನನ್ನನ್ನು ತಿರಿಗಿ ಬರಲು ಆಮಂತ್ರಿಸಿರುತ್ತಾಳೆ.
[13]ಆದರೆ ನಾನು ಹೆಬ್ಬಾಗಿಲ ಬಳಿಯಲ್ಲಿ ಕುಳಿತು
ಕೊಳ್ಳುತ್ತಿರುವ ಮೊರ್ದೆಕೈಯನ್ನು ನೋಡುವಾಗ ನನ್ನ
ಸಂತೋಷವೆಲ್ಲವೂ ಮಾಯವಾಗುತ್ತದೆ'' ಎಂದು
ಹೇಳಿದನು.

[14]ಇದನ್ನು ಕೇಳಿದ ಹಾಮಾನನ ಹೆಂಡತಿ ಜೆರೆಷಳೂ
ಮತ್ತು ಅವನ ಮಿತ್ರ ವೃಂದದವರು ಅವನಿಗೊಂದು ಸಲಹೆ
ಯನ್ನಿತ್ತರು. ''ಒಂದು ಗಲ್ಲು ಮರವನ್ನು ನೆಡಿಸು. ಅದು
ಎಪ್ಪತ್ತೈದು ಅಡಿ ಎತ್ತರವಿರಲಿ. ನಾಳೆ ಮುಂಜಾನೆ
ಮೊರ್ದೆಕೈಯನ್ನು ಗಲ್ಲಿಗೇರಿಸಲು ಅರಸನಿಂದ ಅಪ್ಪಣೆ
ತೆಗೆದುಕೋ. ಅನಂತರ ಅರಸನೊಂದಿಗೆ ಔತಣ ಸಮಾ
ರಂಭಕ್ಕೆ ಹೋಗಿ ಸಂತೋಷಪಡು.''

ಇದನ್ನು ಕೇಳಿ ಹಾಮಾನನು ಸಂತೋಷಗೊಂಡನು.
ಕೂಡಲೇ ಸೇವಕನನ್ನು ಕರೆಸಿ ಗಲ್ಲು ಮರವನ್ನು ಸಿದ್ಧ
ಮಾಡಲು ಆಜ್ಞಾಪಿಸಿದನು.

### ಮೊರ್ದೆಕೈಯನ್ನು ಗೌರವಿಸಿದ್ದು

6 ಆ ರಾತ್ರಿ ಅರಸನಿಗೆ ನಿದ್ರಿಸಲಾಗಲಿಲ್ಲ. ಒಬ್ಬ
ಸೇವಕನನ್ನು ಕರೆದು ರಾಜಕಾಲವೃತ್ತಾಂತ ಪುಸ್ತಕ
ವನ್ನು ತರ ಹೇಳಿ ಅವನಿಂದ ಅದನ್ನು ಓದಿಸಿದನು. (ಈ
ಪುಸ್ತಕದಲ್ಲಿ ಅರಸರ ರಾಜ್ಯ ಆಳ್ವಿಕೆಯಲ್ಲಿ ನಡೆದ ಘಟಣೆ
ಗಳು ಲಿಖಿತವಾಗಿರುತ್ತದೆ.) [2]ಆ ಸೇವಕನು ರಾಜನಿಗೆ
ಪುಸ್ತಕದಿಂದ ಓದುತ್ತಾ ಹೋದನು. ರಾಜನನ್ನು ಕೊಲ್ಲುವ
ಒಳಸಂಚಿನ ವಿಚಾರವನ್ನೂ ಕೇಳಿದನು. ಬಿಗೆತಾನ್ ಮತ್ತು
ತೆರೆಷ್ ಎಂಬ ಇಬ್ಬರು ದ್ವಾರಪಾಲಕರು ರಾಜನನ್ನು
ಕೊಲ್ಲಲು ಒಳಸಂಚು ಮಾಡಿದಾಗ ಮೊರ್ದೆಕೈಗೆ ಅದು
ತಿಳಿದುಬಂತು. ಕೂಡಲೇ ಅವನು ಬೇರೆಯವರ
ಮುಖಾಂತರ ಅರಸನಿಗೆ ತಿಳಿಸಿದನು.

[3]ಇದನ್ನು ಕೇಳುತ್ತಿದ್ದ ಅರಸನು, ''ಮೊರ್ದೆಕೈ ಹೀಗೆ
ಮಾಡಿದುದಕ್ಕೆ ಯಾವ ಗೌರವ ಮತ್ತು ಬಹುಮಾನಗಳು
ಕೊಡಲ್ಪಟ್ಟವು?'' ಎಂದು ವಿಚಾರಿಸಿದನು. ''ಮೊರ್ದೆಕೈಗೆ
ಏನೂ ಕೊಡಲಿಲ್ಲ'' ಎಂದು ಸೇವಕರು ಉತ್ತರಿಸಿದರು.

[4]ಅದೇ ಸಮಯದಲ್ಲಿ ಹಾಮಾನನು ಹೊರಾಂಗಣ
ದಲ್ಲಿದ್ದನು. ಅವನು ತಾನು ತಯಾರಿಸಿಟ್ಟಿರುವ ಗಲ್ಲು
ಕಂಬದಲ್ಲಿ ಮೊರ್ದೆಕೈಯನ್ನು ಗಲ್ಲಿಗೆ ಹಾಕಲು ಅರಸ
ನಿಂದ ಅಪ್ಪಣೆ ಪಡೆದುಕೊಳ್ಳಲು ಬಂದಿದ್ದನು. ಅರಸನು
ಹೊರಾಂಗಣದಲ್ಲಿ, ''ಈಗ ತಾನೇ ಯಾರು ಬಂದರು?''
ಎಂದು ಕೇಳಿದಾಗ [5]ಸೇವಕರು, ''ಹಾಮಾನನು
ನಿಂತಿದ್ದಾನೆ!'' ಎಂದು ಹೇಳಿದರು.

''ಸರಿ, ಒಳಕ್ಕೆ ಕರಕೊಂಡು ಬನ್ನಿರಿ''ಎಂದು
ಆಜ್ಞಾಪಿಸಿದನು.

[6]ಹಾಮಾನನು ಒಳಗೆ ಪ್ರವೇಶಮಾಡುವಾಗ ಅರಸನು,
''ಹಾಮಾನನೇ, ಅರಸನು ಒಬ್ಬನಿಗೆ ಗೌರವಿಸಬೇಕೆಂದು
ಇಚ್ಛಿಸುವಾಗ ಯಾವ ರೀತಿಯಲ್ಲಿ ಅದನ್ನು ಮಾಡ
ಬೇಕು?'' ಎಂದು ಕೇಳಿದನು. ಆಗ ಹಾಮಾನನು,
''ಅರಸನು ಗೌರವಿಸುವವನು ನನಗಿಂತ ಹೆಚ್ಚಿನವನು
ಯಾರಿರಬಹುದು? ಅವನು ನನ್ನ ವಿಚಾರವಾಗಿಯೇ
ನೆನೆಸುತ್ತಿರಬಹುದು'' ಎಂದು ತನ್ನ ಮನಸ್ಸಿನಲ್ಲಿಯೇ
ನೆನೆಸಿಕೊಂಡು

[7]ಅರಸನಿಗೆ, ''ನೀನು ಗೌರವಿಸಬೇಕಾದ ಮನುಷ್ಯನಿಗೆ
ಈ ರೀತಿಯಾಗಿ ಮಾಡಬೇಕು. [8]ಅರಸನು ಧರಿಸಿದ ರಾಜ
ವಸ್ತ್ರಗಳನ್ನು ಸೇವಕರ ಮೂಲಕ ತರಿಸು. ಅಲ್ಲದೆ ರಾಜನು
ಸವಾರಿ ಮಾಡಿರುವ ಕುದುರೆಯನ್ನು ತರಿಸು. ಸೇವಕರು
ಅದರ ಹಣೆಯ ಮೇಲೆ ರಾಜನ ವಿಶೇಷ ಗುರುತನ್ನು
ಇಡಲಿ. [9]ಅನಂತರ ಅರಸನ ಮುಖ್ಯ ಅಧಿಕಾರಿಗಳಲ್ಲೊಬ್ಬ
ನನ್ನು ರಾಜ ವಸ್ತ್ರಗಳಿಗೂ ಕುದುರೆಗೂ ಜವಾಬ್ದಾರನ
ನ್ನಾಗಿ ನೇಮಿಸಿರಿ. ರಾಜನು ಯಾವ ವ್ಯಕ್ತಿಯನ್ನು ಗೌರವಿಸ
ಬೇಕೆಂದಿದ್ದಾನೋ ಆ ವ್ಯಕ್ತಿಯ ಮೇಲೆ ಅವನು ರಾಜ

ವಸ್ತ್ರವನ್ನು ಹಾಕಲಿ. ಆಮೇಲೆ ಅವನನ್ನು ಕುದುರೆಯ
ಮೇಲೆ ಕುಳ್ಳಿರಿಸಿಕೊಂಡು ನಗರದ ಪ್ರಮುಖ ರಸ್ತೆಗಳಲ್ಲಿ
ಮೆರವಣಿಗೆ ಮಾಡಿಸುತ್ತಾ, ರಾಜನು ಗೌರವಿಸುವ
ಮನುಷ್ಯನಿಗೆ ಹೀಗೆಯೇ ಆಗುವುದು' ಎಂದು
ಪ್ರಕಟಿಸುತ್ತಾ ಹೋಗಲಿ'' ಎಂದು ಹೇಳಿದನು.
10''ಈಗಲೇ'' ಅರಸನು ಹಾಮಾನನಿಗೆ ಆಜ್ಞೆಕೊಟ್ಟು
''ಈಗಲೇ ಹೋಗಿ ರಾಜವಸ್ತ್ರಗಳನ್ನೂ ರಾಜನ ಕುದುರೆ
ಯನ್ನೂ ಕೊಂಡು ಹೋಗಿ ಯೆಹೂದ್ಯನಾದ ಮೊರ್ದೆಕೈಗೆ
ನೀನು ಹೇಳಿದ ಪ್ರಕಾರವೆ ಮಾಡು. ಮೊರ್ದೆಕೈ ಅರ
ಮನೆಯ ಹೆಬ್ಬಾಗಿಲ ಬಳಿಯಲ್ಲಿ ಕುಳಿತುಕೊಂಡಿರು
ತ್ತಾನೆ. ನೀನು ಸಲಹೆದಂತೆಯೇ ಎಲ್ಲವನ್ನೂ ಮಾಡು''
ಅಂದನು. 11ಹಾಮಾನನು ಉಡುಪನ್ನೂ ಕುದುರೆಯನ್ನೂ
ತೆಗೆದುಕೊಂಡು ಮೊರ್ದೆಕೈಗೆ ತೊಡಿಸಿ, ಕುದುರೆಯ
ಮೇಲೆ ಕುಳ್ಳಿರಿಸಿ ನಗರದ ಮುಖ್ಯರಸ್ತೆಗಳಲ್ಲಿ ಕರೆದು
ಕೊಂಡು ಹೋಗುತ್ತಿರುವಾಗ, ''ಅರಸನು ಸನ್ಮಾನಿಸುವ
ಮನುಷ್ಯನಿಗೆ ಹೀಗೆಯೇ ಆಗುವದು'' ಎಂದು
ಪ್ರಕಟಿಸಿದನು. 12ಇದಾದ ಬಳಿಕ ಮೊರ್ದೆಕೈ ಹೆಬ್ಬಾಗಿಲ
ಬಳಿಯಲ್ಲಿದ್ದ ತನ್ನ ಸ್ಥಾನಕ್ಕೆ ಹೋದನು. ಆದರೆ
ಹಾಮಾನನು ತನ್ನ ಮನೆಗೆ ಅವಸರವಸರವಾಗಿ ನಡೆದನು.
ನಾಚಿಕೆಯಿಂದಲೂ ಸಿಟ್ಟಿನಿಂದಲೂ ತನ್ನ ಮುಖವನ್ನು
ಮುಚ್ಚಿಕೊಂಡಿದ್ದನು. 13ತನ್ನ ಹೆಂಡತಿ ಜೆರೆಷಳಿಗೂ ಮತ್ತು
ತನಗೆ ಸಲಹೆ ಕೊಟ್ಟಿದ್ದ ಮಿತ್ರವೃಂದದವರಿಗೂ ನಡೆದ
ವಿಷಯ ತಿಳಿಸಿದನು. ಆಗ ಅವರು ತಿಳಿಸಿದ್ದೇನಂದರೆ:
''ಮೊರ್ದೆಕೈಯು ಯೆಹೂದ್ಯನಾಗಿದ್ದರೆ ನೀನು ಜಯಗಳಿ
ಸುವುದಿಲ್ಲ. ಈಗಲೇ ನೀನು ಸೋಲುತ್ತಿರುವಿ. ನಿಜ
ವಾಗಿಯೂ ನೀನೇ ನಾಶವಾಗುವಿ.''
14ಅವರು ಮಾತಾಡುತ್ತಿರುವಾಗಲೇ ರಾಜ ಕಂಚುಕಿ
ಗಳು ಅವನನ್ನು ರಾಣಿ ಎಸ್ತೇರಳು ಏರ್ಪಡಿಸಿದ್ದ ಔತಣಕ್ಕೆ
ಕರಕೊಂಡು ಹೋಗಲು ಬಂದರು.

### ಹಾಮಾನನು ಗಲ್ಲಿಗೇರಿಸಲ್ಪಟ್ಟನು

7 ಅರಸನೂ ಹಾಮಾನನು ರಾಣಿಯ ಅರಮನೆಗೆ
ಔತಣಕ್ಕಾಗಿ ಹೋದರು. 2ಈ ಔತಣ ಸಮಾರಂಭದ
ಎರಡನೆ ದಿನದಂದು ಅವರಿಬ್ಬರೂ ದ್ರಾಕ್ಷಾರಸ ಸೇವನೆ
ಮಾಡುತ್ತಿರುವಾಗ ತಿರಿಗಿ ರಾಜನು ತನ್ನ ರಾಣಿಯನ್ನು
ಪ್ರಶ್ನಿಸಿದನು, ''ಎಸ್ತೇರ್ ರಾಣಿಯೇ, ನಿನಗೆ ಬೇಕಾದ
ದ್ದನ್ನು ಕೇಳಿಕೊ. ನಾನು ಕೊಡುವೆನು; ಅರ್ಧರಾಜ್ಯ
ಬೇಕಾದರೂ ನಾನು ಕೊಡುತ್ತೇನೆ'' ಎಂದನು.
3ಆಗ ಎಸ್ತೇರ್ ರಾಣಿಯು, ''ರಾಜನೇ ನೀನು ನನ್ನನ್ನು
ಮೆಚ್ಚಿ ಪ್ರೀತಿಸುವದಾದರೆ ದಯಮಾಡಿ ನಾನು ಬದುಕು
ವಂತೆ ಮಾಡು. ಅಲ್ಲದೇ ನನ್ನ ಜನರನ್ನು ಉಳಿಸು. ಇದೇ
ನನ್ನ ಬಿನ್ನಹ. 4ಯಾಕೆಂದರೆ ನಾನೂ, ನನ್ನ ಜನರೂ ಕೊಲ್ಲ
ಲ್ಪಡಲು, ನಾಶವಾಗಲು, ಸಂಪೂರ್ಣವಾಗಿ ನಿರ್ಮೂಲ
ವಾಗಲು ಮಾರಲ್ಪಟ್ಟಿರುತ್ತೇವೆ. ನಾವು ಬರೇ ಗುಲಾಮ
ರಾಗಿ ಮಾರಲ್ಪಟ್ಟಿದ್ದರೆ ನಾನು ಸುಮ್ಮನಿರುತ್ತಿದ್ದೆ.
ಯಾಕೆಂದರೆ ಅದು ರಾಜನನ್ನು ತೊಂದರೆಪಡಿಸುವಂಥಾ
ದೊಡ್ಡ ವಿಷಯವಲ್ಲ'' ಎಂದು ಉತ್ತರಿಸಿದಳು.
5ಆಗ ರಾಜನು ಎಸ್ತೇರಳಿಗೆ ''ಹೀಗೆ ನಿನಗೆ ಯಾರು
ಮಾಡಿದರು? ನಿನ್ನ ಜನರಿಗೆ ಇಂಥಾ ಕೆಲಸವನ್ನು
ಮಾಡಲು ಯಾರಿಗೆ ಧೈರ್ಯವಾಯಿತು?'' ಎಂದು ಕೇಳಿ
ದನು. 6ಎಸ್ತೇರಳು ಉತ್ತರಿಸುತ್ತಾ, ''ನಮ್ಮನ್ನು ದ್ವೇಷಿಸುವ
ಮನುಷ್ಯನು ಈ ಕೆಟ್ಟ ಹಾಮಾನನೇ?'' ಎಂದು
ಹೇಳಿದಳು.
ಆಗ ಹಾಮಾನನು ಭಯದಿಂದ ನಡುಗಿದನು.
7ಅರಸನು ಕೋಪೋದ್ರಿಕ್ತನಾಗಿ, ಪಾನಪಾತ್ರೆಯನ್ನು
ಅಲ್ಲಿಯೇ ಬಿಟ್ಟು ಎದ್ದು ಹೊರಗೆ ತೋಟಕ್ಕೆ ನಡೆದನು.
ಹಾಮಾನನು ಕೋಣೆಯಲ್ಲಿಯೇ ಉಳಿದು ತನ್ನ ಪ್ರಾಣ
ವನ್ನು ಉಳಿಸಬೇಕೆಂದು ಎಸ್ತೇರ್ ರಾಣಿಯನ್ನು ಬೇಡು
ತ್ತಿದ್ದನು. ಯಾಕಂದರೆ ರಾಜನು ತನ್ನನ್ನು ಕೊಲ್ಲಲು
ತೀರ್ಮಾನಿಸಿರುವುದು ಅವನಿಗೆ ಅರಿವಾಯಿತು.
8ಅರಸನು ಹೂದೋಟದಿಂದ ಹಿಂದಿರುಗಿ ಕೋಣೆ
ಯೊಳಗೆ ಬಂದಾಗ ಹಾಮಾನನು ಆಸನದ ಮೇಲೆ
ಒರಗಿದ್ದ ಎಸ್ತೇರ್ ರಾಣಿಯ ಆಸನದ ಮೇಲೆ ಬೀಳು
ವದನ್ನು ಕಂಡನು. ಅರಸನು ಸಿಟ್ಟು ತುಂಬಿದವನಾಗಿ,
''ನನ್ನ ಮುಂದೆಯೇ ನೀನು ರಾಣಿಯ ಮೇಲೆ ಕೈಮಾ
ಡುತ್ತೀಯಾ?'' ಎಂದು ಕೇಳಿದನು.
9ಇದನ್ನು ಹೇಳಿದೊಡನೆಯೇ ಹತ್ತಿರದಲ್ಲಿದ್ದ ಸೇವಕರು
ಬಂದು ಹಾಮಾನನ ಮುಖಕ್ಕೆ ಮುಸುಕುಹಾಕಿದರು.
ಅವರಲ್ಲಿದ್ದ ಹರ್ಬೋನ ಎಂಬ ಕಂಚುಕಿಯು,
''ಹಾಮಾನನು ತನ್ನ ಮನೆಯ ಬಳಿಯಲ್ಲಿ ಎಪ್ಪತ್ತೈದು ಅಡಿ
ಎತ್ತರದ ಗಲ್ಲುಮರವನ್ನು ಮೊರ್ದೆಕೈಗೋಸ್ಕರ ಮಾಡಿ
ದ್ದಾನೆ. ನಿನ್ನನ್ನು ಕೊಲ್ಲಲು ನಡೆಸಿದ್ದ ಸಂಚನ್ನು ನಿನಗೆ ತಿಳಿಸಿ
ನಿನ್ನನ್ನು ಕಾಪಾಡಿದವನೇ ಮೊರ್ದೆಕೈ'' ಎಂದು ಹೇಳಿ
ದನು. ಅದಕ್ಕೆ ರಾಜನು, ''ಹಾಮಾನನನ್ನು ಅದೇ
ಗಲ್ಲುಮರಕ್ಕೆ ತೂಗು ಹಾಕಿರಿ'' ಎಂದನು.
10ಮೊರ್ದೆಕೈಗೋಸ್ಕರ ಸಿದ್ಧಮಾಡಿದ್ದ ಗಲ್ಲುಮರಕ್ಕೆ
ಸೇವಕರು ಹಾಮಾನನ್ನು ತೂಗು ಹಾಕಿದರು. ಅನಂತರ
ರಾಜನ ಸಿಟ್ಟು ಇಳಿಯಿತು.

### ಯೆಹೂದ್ಯರಿಗೆ ಸಹಾಯವಾಗುವ ರಾಜಾಜ್ಞೆ

8 ಅದೇ ದಿವಸದಲ್ಲಿ ರಾಜ ಅಹಷ್ವೇರೋಷನು
ಯೆಹೂದ್ಯರ ವೈರಿಯಾದ ಹಾಮಾನನ ಆಸ್ತಿಪಾಸ್ತಿ
ಗಳನ್ನೆಲ್ಲಾ ರಾಣಿ ಎಸ್ತೇರಳಿಗೆ ಕೊಟ್ಟನು. ಎಸ್ತೇರ್
ರಾಣಿಯು ಅರಸನಿಗೆ ಮೊರ್ದೆಕೈ ತನ್ನ ಸೋದರಣ್ಣನಾಗ

ಬೇಕು'' ಎಂದಳು. ನಂತರ ಮೊರ್ದೆಕೈಯು ಅರಸನನ್ನು
ಕಾಣಲು ಬಂದನು. 2ಹಾಮಾನನಿಂದ ತಿರಿಗಿ ಪಡ
ಕೊಂಡಿದ್ದ ತನ್ನ ಮುದ್ರೆಯುಂಗುರವನ್ನು ರಾಜನು
ಮೊರ್ದೆಕೈಗೆ ಕೊಟ್ಟನು. ಎಸ್ತೇರ್ ರಾಣಿಯು
ಹಾಮಾನನ ಮನೆಯ ಆಡಳಿತವನ್ನು ಮೊರ್ದೆಕೈಗೆ
ಕೊಡಿಸಿದಳು. 3ಎಸ್ತೇರಳು ತಿರುಗಿ ರಾಜನನ್ನು ಮಾತಾಡಿ
ಸುವುದಕ್ಕೆ ಹೋದಳು. ಎಸ್ತೇರಳು ಅರಸನ ಪಾದಗಳಿಗೆ
ಅಡ್ಡಬಿದ್ದು ಅಳಲು ಪ್ರಾರಂಭಿಸಿದಳು. ಅವಳು ಹಾಮಾ
ನನ ದುಷ್ಟ ಯೋಜನೆಯನ್ನು ರದ್ದು ಮಾಡಬೇಕೆಂದು
ಅರಸನನ್ನು ಬೇಡಿಕೊಂಡಳು. ಅಗಾಗನ ವಂಶಿಕನಾದ
ಹಾಮಾನನು ಯೆಹೂದ್ಯರನ್ನು ನಿರ್ಮೂಲ ಮಾಡುವ
ಹಂಚಿಕೆಯನ್ನು ಮಾಡಿದ್ದನು.

4ಎಸ್ತೇರಳಿಗೆ ರಾಜನು ತನ್ನ ರಾಜದಂಡವನ್ನು ತೋರಿಸಿ
ದಾಗ ಆಕೆಯು ಎದ್ದು ರಾಜನಿಗೆದುರಾಗಿ ನಿಂತು
ಕೊಂಡಳು. 5ಆಕೆ ಅರಸನಿಗೆ, ''ನೀವು ನನ್ನನ್ನು ಇಷ್ಟ
ಪಡುವುದಾದರೆ ಮತ್ತು ನಿಮಗೆ ಮೆಚ್ಚಿಕೆಯಾದರೆ ನೀವು
ನನ್ನ ಈ ಬಿನ್ನಹವನ್ನು ಪೂರೈಸಬೇಕು. ಅದೇನಂದರೆ,
ರಾಜನ ಪ್ರಾಂತ್ಯಗಳಲ್ಲಿರುವ ಎಲ್ಲಾ ಯೆಹೂದ್ಯರನ್ನು
ನಾಶಮಾಡಬೇಕೆಂದು ಹಾಮಾನನು ಹೊರಡಿಸಿರುವ
ಆಜ್ಞೆಯನ್ನು ರದ್ದು ಮಾಡಲು ನೀವು ಇನ್ನೊಂದು ಆಜ್ಞೆ
ಯನ್ನು ಹೊರಡಿಸಬೇಕು. 6ನನ್ನ ಜನರಿಗೆ ಭಯಂಕರ
ವಾದ ಆ ಪರಿಸ್ಥಿತಿ ಉಂಟಾಗುವುದನ್ನಾಗಲೀ ನನ್ನ
ಕುಟುಂಬವು ಕೊಲ್ಲಲ್ಪಡುವುದನ್ನು ಕಣ್ಣಾರೆ ನೋಡುವು
ದಕ್ಕಾಗಲೀ ನನಗೆ ಸಾಧ್ಯವಿಲ್ಲದಿರುವುದರಿಂದ ರಾಜನಲ್ಲಿ
ಬೇಡಿಕೊಳ್ಳುತ್ತಿದ್ದೇನೆ'' ಎಂದಳು.

7ಅಹಷ್ವೇರೋಷನು ಎಸ್ತೇರ್ ರಾಣಿಗೆ ಮತ್ತು
ಮೊರ್ದೆಕೈಗೆ, ''ಹಾಮಾನನು ಯೆಹೂದ್ಯರನ್ನು ದ್ವೇಷಿಸಿದ
ಕಾರಣ ಅವನನ್ನು ಗಲ್ಲಿಗೇರಿಸುವಂತೆ ನನ್ನ ಸಿಪಾಯಿಗಳಿಗೆ
ಆಜ್ಞಾಪಿಸಿದೆನು; ಅವನ ಆಸ್ತಿಪಾಸ್ತಿಗಳನ್ನೆಲ್ಲಾ ಎಸ್ತೇರಳ
ವಶಕ್ಕೆ ಕೊಟ್ಟೆನು. 8ಈಗ ಇನ್ನೊಂದು ರಾಜಾಜ್ಞೆಯನ್ನು
ಬರೆಯಿಸಲು ನಾನು ನಿಮಗೆ ಅಧಿಕಾರ ಕೊಡುತ್ತೇನೆ.
ನಿಮಗೆ ಸರಿತೋಚುವ ರೀತಿಯಲ್ಲಿ ಯೆಹೂದ್ಯರಿಗೆ
ಸಹಾಯವಾಗುವಂತೆ ಆ ಆಜ್ಞೆಯನ್ನು ರಾಜನ ಅಧಿಕಾರ
ದೊಡನೆ ಬರೆಯಿಸಿ, ರಾಜನ ಉಂಗುರದಿಂದ ಮುದ್ರೆ
ಒತ್ತಿರಿ. ರಾಜ ಮುದ್ರೆಯುಳ್ಳ ಯಾವ ಆಜ್ಞೆಯೂ ರದ್ದಾಗ
ಕೂಡದು'' ಎಂದನು.

9ಕೂಡಲೇ ರಾಜಲೇಖಕರನ್ನು ಕರೆಯಿಸಿ ಅವರಿಂದ
ಮೊರ್ದೆಕೈ ಹೇಳಿದಂತೆ ರಾಜಾಜ್ಞೆಯನ್ನು ಸಾಮ್ರಾಜ್ಯದ
ನಾನಾ ಭಾಷೆಗಳಲ್ಲಿ ಬರೆಯಿಸಲಾಯಿತು. ಹಿಂದುಸ್ಥಾನ
ದಿಂದ ಹಿಡಿದು ಇಥಿಯೋಪ್ಯದ ತನಕ ರಾಜ್ಯದ
ನೂರಿಪ್ಪತ್ತೇಳು ಸಂಸ್ಥಾನಗಳ ಅಧಿಕಾರಿಗಳಿಗೆ, ಎಲ್ಲಾ
ರಾಜ್ಯಪಾಲರಿಗೆ, ಜನ ನಾಯಕರಿಗೆ ಮತ್ತು ಯೆಹೂದ್ಯ
ರಿಗೆ ಆಯಾ ಭಾಷೆಗಳ ಲಿಪಿಗಳಲ್ಲಿ ಮೂರನೇ ತಿಂಗಳಾದ
ಸೀವಾನ್ ಮಾಸದ ಇಪ್ಪತ್ತಮೂರನೇ ದಿವಸದಲ್ಲಿ ಬರೆ
ಯಿಸಲಾಯಿತು. 10ರಾಜನ ಆಜ್ಞೆಯ ಪ್ರಕಾರ ಮೊರ್ದೆಕೈ
ರಾಜಶಾಸನವನ್ನು ಬರೆಯಿಸಿದನು. ಅದಕ್ಕೆ ರಾಜ
ಮುದ್ರೆಯನ್ನು ಒತ್ತಿಸಿ ರಾಜನಿಗಾಗಿ ವಿಶೇಷವಾಗಿ ಬೆಳೆಸಿದ
ಅತ್ಯಂತ ವೇಗವಾಗಿ ಓಡುವ ಕುದುರೆಗಳ ಮೂಲಕ
ಸಂದೇಶವಾಹಕರಿಂದ ರಾಜ್ಯದ ಮೂಲೆ ಮೂಲೆಗೆ
ರಾಜಾಜ್ಞೆಯನ್ನು ಕಳುಹಿಸಿದನು.

11ಆ ರಾಜಾಜ್ಞೆಯು ಹೀಗಿತ್ತು:

''ಪ್ರತಿಯೊಂದು ನಗರಗಳಲ್ಲಿರುವ ಯೆಹೂದ್ಯರು
ಸ್ವರಕ್ಷಣೆಗೋಸ್ಕರ ಒಟ್ಟಾಗಿ ಸೇರಿ ಬರಲು ಅವರಿಗೆ
ಹಕ್ಕಿದೆ. ಅಲ್ಲದೆ ಅವರನ್ನು ಕೊಲ್ಲಲು, ಆಸ್ತಿ ಅಪಹರಿ
ಸಲು ಅವರನ್ನು ನಿರ್ಮೂಲ ಮಾಡುವ ಉದ್ದೇಶ
ದಿಂದ ಅವರ ಬಳಿಗೆ ಬರುವವರನ್ನು ಎದುರಿಸಿ,
ಕೊಂದು ನಾಶಮಾಡುವ ಹಕ್ಕು ಅವರಿಗಿದೆ.
ಯೆಹೂದ್ಯರಿಗೆ ತಮ್ಮನ್ನು ಹಗೆ ಮಾಡುವ ವೈರಿಗಳನ್ನು
ಕೊಂದು ಅವರ ಆಸ್ತಿಪಾಸ್ತಿಗಳನ್ನು ಸೂರೆಮಾಡುವ
ಹಕ್ಕಿದೆ.''

12ಹೀಗೆ ಮಾಡಲು ಅಹಷ್ವೇರೋಷ್ ರಾಜನ ಎಲ್ಲಾ
ಸಂಸ್ಥಾನಗಳಲ್ಲಿರುವ ಯೆಹೂದ್ಯರಿಗೆ ಹನ್ನೆರಡನೆಯ
ತಿಂಗಳಾದ ಆದಾರ್ ಮಾಸದ ಹದಿಮೂರನೆ ದಿನವನ್ನು
ಗೊತ್ತುಪಡಿಸಲಾಯಿತು. 13ಈ ರಾಜಾಜ್ಞೆಯು ದೇಶದ
ಶಾಸನವಾಯಿತು. ಮತ್ತು ಇದನ್ನು ರಾಜ್ಯದ ಎಲ್ಲಾ
ಸಂಸ್ಥಾನಗಳ ಎಲ್ಲಾ ಜನರಿಗೆ ಪ್ರಕಟಿಸಲಾಯಿತು. ಯಾವ
ದಿವಸದಲ್ಲಿ ಯೆಹೂದ್ಯರನ್ನು ನಿರ್ಮೂಲ ಮಾಡಲು ಆಜ್ಞೆ
ಹೊರಡಿತ್ತೋ ಆ ದಿವಸದಲ್ಲಿಯೆ ಯೆಹೂದ್ಯರು ತಮ್ಮ
ವೈರಿಗಳನ್ನು ಎದುರಿಸಿ ಅವರನ್ನು ಕೊಲ್ಲುವುದಕ್ಕೆ
ತಯಾರಿರಬೇಕೆಂದು ಈ ಆಜ್ಞೆಯನ್ನು ಹೊರಡಿಸಿದ್ದು.
14ಈ ಆಜ್ಞೆಯನ್ನು ಜನರಿಗೆ ತಲುಪಿಸಲು ಅರಸನು
ಸಂದೇಶವಾಹಕರನ್ನು ಅವಸರಪಡಿಸಿದನು. ಮತ್ತು
ಶೂಷನ್ ನಗರದಲ್ಲೂ ಇದು ಪ್ರಕಟವಾಯಿತು. 15ರಾಜ
ಸನ್ನಿಧಿಯಿಂದ ಮೊರ್ದೆಕೈ ಹೊರಟಾಗ, ಅರಸನು ಕೊಟ್ಟ
ವಿಶೇಷ ವಸ್ತ್ರಗಳನ್ನು ಮೊರ್ದೆಕೈಯು ಧರಿಸಿದ್ದನು. ಅದು
ನೀಲಿ ಮತ್ತು ಬಳಿ ಬಣ್ಣದಾಗಿತ್ತು. ಮತ್ತು ತಲೆಗೆ
ಬಂಗಾರದ ಕಿರೀಟವನ್ನು ತೊಟ್ಟಿದ್ದನು. ಅಲ್ಲದೆ ನೇರಳೇ
ಬಣ್ಣದ ವಸ್ತ್ರವೂ ಕೂಡಾ ಅವನಲ್ಲಿದ್ದವು. ರಾಜಧಾನಿ
ಯಾದ ಶೂಷನ್ ನಗರದಲ್ಲಿ ವಿಶೇಷ ಸಮಾರಂಭವಿತ್ತು.
ಜನರು ಸಂತೋಷದಿಂದ ನಲಿದಾಡಿದರು. 16ಯೆಹೂದ್ಯ
ರಿಗೆ ಆ ದಿನ ಅತ್ಯಂತ ಸಂತೋಷದ ದಿನವಾಗಿತ್ತು. ಆ ದಿನ
ಅವರಿಗೆ ಬಹಳ ಆನಂದ ಮತ್ತು ಹರ್ಷದ ದಿನವಾಗಿತ್ತು.
17ರಾಜನ ಸಾಮ್ರಾಜ್ಯದ ಸಂಸ್ಥಾನಗಳಲ್ಲಿ ಎಲ್ಲೆಲ್ಲಿ

ರಾಜಶಾಸನವು ತಲಪಿತೋ ಅಲ್ಲಲ್ಲಿ ಯೆಹೂದ್ಯರೆಲ್ಲರೂ
ಆನಂದದಿಂದ ನಲಿದಾಡಿದರು. ಅದು ಅವರಿಗೆ ಅತ್ಯಂತ
ಸಂತಸದ ದಿವಸವಾಗಿತ್ತು. ತಮ್ಮ ತಮ್ಮ ಮನೆಗಳಲ್ಲಿ ಔತಣ
ಸಿದ್ಧಪಡಿಸಿದರು. ಸಾಮಾನ್ಯ ಜನರಲ್ಲಿ ಎಷ್ಟೋ ಮಂದಿ
ಯೆಹೂದ್ಯ ಮತಾವಲಂಬಿಗಳಾದರು. ಯಾಕೆಂದರೆ
ಅವರು ಯೆಹೂದ್ಯರಿಗೆ ತುಂಬಾ ಹೆದರಿ ಆ ರೀತಿಯಾಗಿ
ಮಾಡಿದರು.

## ಯೆಹೂದ್ಯರಿಗೆ ಜಯ

9 ಹನ್ನೆರಡನೆಯ ತಿಂಗಳಾದ ಅದಾರ್ ಮಾಸದ
ಹದಿಮೂರನೇ ದಿವಸದಲ್ಲಿ ಯೆಹೂದೀ ವೈರಿಗಳು
ರಾಜಾಜ್ಞೆಗನುಸಾರವಾಗಿ ಯೆಹೂದ್ಯರನ್ನು ನಿರ್ನಾಮ
ಮಾಡಬೇಕಾಗಿತ್ತು. ಅವರು ಆ ದಿವಸಕ್ಕಾಗಿ ಕಾಯುತ್ತಿರು
ವಾಗ ಪರಿಸ್ಥಿತಿಯು ಬದಲಾಯಿತು. ಯೆಹೂದ್ಯರು ಅವರ
ಶತ್ರುಗಳಿಗಿಂತ ಬಲಾಢ್ಯರಾದರು. 2ರಾಜನಾದ ಅಹಷ್ವೇ
ರೋಷನ ಸಾಮ್ರಾಜ್ಯದ ಸಂಸ್ಥಾನಗಳಲ್ಲಿದ್ದ ಯೆಹೂ
ದ್ಯರು ತಮ್ಮನ್ನು ಕೊಲ್ಲಲು ಬರುವ ವೈರಿಗಳನ್ನು
ಎದುರಿಸಲು ಒಟ್ಟಾಗಿ ಸೇರಿದರು. ಇವರಿಗೆ ವಿರುದ್ಧವಾಗಿ
ಬಿದ್ದು ಹೊಡೆದಾಡಲು ಯಾರಿಗೂ ಧೈರ್ಯಸಾಲಲಿಲ್ಲ.
ಯೆಹೂದ್ಯರ ಮೇಲೆ ಜನರಿಗೆ ಭೀತಿ ಉಂಟಾಯಿತು.
3ಅಲ್ಲದೆ ಸಂಸ್ಥಾನಗಳಲ್ಲಿದ್ದ ಅಧಿಕಾರಿಗಳು, ರಾಜ್ಯ
ಪಾಲರು, ಆಡಳಿತಾಧಿಕಾರಿಗಳು ಯೆಹೂದ್ಯರಿಗೆ ನೆರ
ವಾದರು. ಯಾಕಂದರೆ ಅವರು ಮೊರ್ದೆಕೈಗೆ ಹೆದರು
ತ್ತಿದ್ದರು. 4ಮೊರ್ದೆಕೈಯು ಅರಮನೆಯಲ್ಲಿ ಅತ್ಯಂತ
ಪ್ರಭಾವಶಾಲಿಯಾಗಿದ್ದನು. ಸಂಸ್ಥಾನಗಳಲ್ಲಿರುವವ
ರೆಲ್ಲರೂ ಅವನ ಪ್ರಖ್ಯಾತಿಯ ಬಗ್ಗೆ ಕೇಳಿದ್ದರು. ದಿನೇ
ದಿನೇ ಮೊರ್ದೆಕೈಯು ಬಲಶಾಲಿಯಾಗುತ್ತಾ ಬಂದನು.
5ತಮ್ಮ ಶತ್ರುಗಳನ್ನೆಲ್ಲಾ ಯೆಹೂದ್ಯರು ಸೋಲಿಸಿ ತಮ್ಮ
ಖಡ್ಗಗಳಿಂದ ನಾಶಮಾಡಿದರು; ತಮ್ಮನ್ನು ದ್ವೇಷಿಸುತ್ತಿದ್ದ
ವರನ್ನು ತಮಗಿಷ್ಟ ಬಂದಂತೆ ಮಾಡಿದರು. 6ರಾಜಧಾನಿ
ಯಾದ ಶೂಷನ್‌ನಲ್ಲಿಯೇ ಯೆಹೂದ್ಯರು ಐನೂರು
ಮಂದಿ ಶತ್ರುಗಳನ್ನು ಹತಿಸಿದರು. 7ಅವರು ಹತಿಸಿದವರಾ
ರೆಂದರೆ: ಪರ್ಷಂದಾತ, ದಲ್ಫೋನ್, ಅಸ್ಪಾತ,
8ಪೋರಾತ, ಅದಲ್ಯ, ಅರೀದಾತ, 9ಪರ್ಮಷ್ಟ, ಅರೀಸೈ,
ಅರಿದೈ, ಮತ್ತು ವೈಜಾತ. 10ಇವರು ಹಾಮಾನನ ಹತ್ತು
ಗಂಡು ಮಕ್ಕಳಾಗಿದ್ದರು. ಹಾಮಾನನು ಹಮ್ಮೆದಾತನ
ಮಗನೂ, ಯೆಹೂದ್ಯರ ಶತ್ರುವೂ ಆಗಿದ್ದನು.
ಯೆಹೂದ್ಯರು ಅವರನ್ನು ಹತಿಸಿದ್ದು ಮಾತ್ರವೇ, ಹೊರತು
ಅವರ ಸೊತ್ತುಗಳನ್ನು ಅಪಹರಿಸಲಿಲ್ಲ.
11ಶೂಷನ್ ನಗರದಲ್ಲಿ ಆ ದಿವಸ ಎಷ್ಟು ಮಂದಿ ಸತ್ತರು
ಎಂದು ಅರಸನು ಕೇಳಿ ತಿಳಿದುಕೊಂಡನು. 12ಮತ್ತು ರಾಣಿ
ಯಾದ ಎಸ್ತೇರಳಿಗೆ, ‘‘ಶೂಷನ್‌ನಲ್ಲಿ ಯೆಹೂದ್ಯರು
ಹಾಮಾನನ ಹತ್ತು ಗಂಡು ಮಕ್ಕಳೂ ಸೇರಿಸಿ ಐನೂರು
ಮಂದಿಯನ್ನು ಕೊಂದಿದ್ದಾರೆ. ಇನ್ನು ಬೇರೆ ಸಂಸ್ಥಾನ
ಗಳಲ್ಲಿ ನಿನಗೇನಾಗಬೇಕು? ನನಗೆ ಹೇಳು. ನಾನು
ಹಾಗೆಯೇ ಮಾಡಿಸುತ್ತೇನೆ’’ ಎಂದು ಹೇಳಿದನು.
13ಅದಕ್ಕೆ ಎಸ್ತೇರಳು, ‘‘ಅರಸನು ಇಷ್ಟಪಟ್ಟಲ್ಲಿ
ನಾಳೆಯೂ ಶೂಷನ್‌ನಲ್ಲಿರುವ ಯೆಹೂದ್ಯರು
ಹೀಗೆಯೇ ಮಾಡಲಿ ಮತ್ತು ಹಾಮಾನನ ಆ ಹತ್ತು ಮಂದಿ
ಗಂಡು ಮಕ್ಕಳನ್ನು ಗಲ್ಲುಕಂಬದಲ್ಲಿ ನೇತಾಡಿಸಲಿ’’
ಅಂದಳು.
14ಅದೇ ರೀತಿ ಅರಸನು ಆಜ್ಞಾಪಿಸಿದನು. ರಾಜಾ
ಜ್ಞೆಯು ಇನ್ನೊಂದು ದಿವಸ ಮುಂದುವರಿಯಿತು ಮತ್ತು
ಹಾಮಾನನ ಹತ್ತು ಮಂದಿ ಗಂಡು ಮಕ್ಕಳನ್ನು ತೂಗು
ಹಾಕಿದರು. 15ಶೂಷನ್ ನಗರದಲ್ಲಿದ್ದ ಯೆಹೂದ್ಯರು
ಅದಾರ್ ಮಾಸದ ಹದಿನಾಲ್ಕನೆಯ ದಿನದಂದು ಒಟ್ಟಾಗಿ
ಸೇರಿ ಆ ದಿವಸ ಮುನ್ನೂರು ಮಂದಿಯನ್ನು ಹತಿಸಿದರೆ
ಹೊರತು, ಅವರ ಆಸ್ತಿಪಾಸ್ತಿಯನ್ನು ಮುಟ್ಟಲಿಲ್ಲ.
16ಅದೇ ಸಮಯದಲ್ಲಿ ಇತರ ಸಂಸ್ಥಾನಗಳಲ್ಲಿದ್ದ
ಯೆಹೂದ್ಯರು ತಾವು ಬಲ ಹೊಂದುವಂತೆ ಒಟ್ಟಾಗಿ ಸೇರಿ
ಒಗ್ಗಟ್ಟಿನಲ್ಲಿದ್ದು ತಮ್ಮ ವೈರಿಗಳನ್ನು ಸಂಪೂರ್ಣವಾಗಿ
ನಿರ್ನಾಮ ಮಾಡಿದರು. ಹೀಗೆ ಒಟ್ಟು ಎಪ್ಪತ್ತೈದು ಸಾವಿರ
ಜನರು ಹತಿಸಲ್ಪಟ್ಟರು. ಆದರೆ ಅವರ ಆಸ್ತಿಯನ್ನು ಸೂರೆ
ಮಾಡಲಿಲ್ಲ. 17ಅದಾರ್ ಮಾಸದ ಹದಿಮೂರನೇ ದಿವಸ
ದಲ್ಲಿ ಈ ಕಾರ್ಯವು ನಡೆಯಿತು. ಹದಿನಾಲ್ಕನೆಯ ದಿವಸ
ದಲ್ಲಿ ಅವರು ವಿಶ್ರಾಂತಿ ತೆಗೆದುಕೊಂಡರು. ಆ ದಿವಸವನ್ನು
ಯೆಹೂದ್ಯರು ತಮ್ಮ ಸಂತಸದ ದಿನವಾಗಿ ಆಚರಿಸಿದರು.

## ಪೂರಿಮ್ ಹಬ್ಬ

18ಅದಾರ್ ತಿಂಗಳಿನ ಹದಿಮೂರನೇ ಮತ್ತು ಹದಿ
ನಾಲ್ಕನೇ ದಿವಸಗಳಲ್ಲಿ ಶೂಷನ್ ನಗರದ ಯೆಹೂದ್ಯರು
ಒಟ್ಟಾಗಿ ಸೇರಿ ಬಂದು ಹದಿನೈದನೆಯ ದಿವಸದಲ್ಲಿ ಅವರು
ವಿಶ್ರಾಂತಿ ತೆಗೆದುಕೊಂಡರು. ಹದಿನೈದನೆಯ ದಿವಸವನ್ನು
ಅವರು ಸಂತಸದ ಹಬ್ಬವನ್ನಾಗಿ ಮಾಡಿದರು. 19ದೇಶದ
ಎಲ್ಲಾ ಹಳ್ಳಿ ಹಳ್ಳಿಗಳಲ್ಲಿದ್ದ ಯೆಹೂದ್ಯರು ಅದಾರ್
ತಿಂಗಳಿನ ಹದಿನಾಲ್ಕನೆಯ ದಿವಸವನ್ನು ಪೂರಿಮ್
ದಿವಸವನ್ನಾಗಿ ಆಚರಿಸಿದರು. ಹದಿನಾಲ್ಕನೆಯ ದಿವಸವು
ಅವರಿಗೆ ಸಂತಸದ ಹಬ್ಬ. ಆ ದಿವಸ ಅವರು ಔತಣ ಮಾಡಿ
ಒಬ್ಬರಿಗೊಬ್ಬರು ಉಡುಗೊರೆಗಳನ್ನು ಕೊಟ್ಟು
ಕಳುಹಿಸಿದರು.
20ನಡೆದ ಸಂಗತಿಗಳನ್ನೆಲ್ಲಾ ಮೊರ್ದೆಕೈ ಬರೆದಿಟ್ಟು
ಅಹಷ್ವೇರೋಷನ ಸಾಮ್ರಾಜ್ಯದಲ್ಲಿ ವಾಸಿಸಿದ್ದ ಎಲ್ಲಾ
ಯೆಹೂದ್ಯರಿಗೆ, ದೂರ ಮತ್ತು ಹತ್ತಿರದಲ್ಲಿರುವ
ಯೆಹೂದ್ಯರಿಗೂ ಪತ್ರ ಬರೆಯಿಸಿದನು. 21ಅದರಲ್ಲಿ

ಅವನು ಯೆಹೂದ್ಯರೆಲ್ಲರೂ ಪ್ರತೀ ವರುಷ ಅದಾರ್
ತಿಂಗಳಿನ ಹದಿನಾಲ್ಕನೇ ಮತ್ತು ಹದಿನೈದನೇ ದಿವಸ
ಗಳನ್ನು ಪೂರಿಮ್ ದಿವಸಗಳನ್ನಾಗಿ ಆಚರಿಸಬೇಕು ಎಂಬ
ದಾಗಿ ಆದೇಶ ನೀಡಿದನು. 22 ಯಾಕೆಂದರೆ ಆ ದಿವಸದಲ್ಲಿ
ಯೆಹೂದ್ಯರು ತಮ್ಮ ಶತ್ರುಗಳನ್ನು ಸದೆ ಬಡಿದರು. ಆ
ದಿವಸದಲ್ಲಿ ಅವರಿಗೆ ಶೋಕದ ಬದಲಾಗಿ ಸಂತಸವು
ಒದಗಿಬಂತು. ಮತ್ತು ಆ ದಿವಸದಲ್ಲಿ ಅವರ ರೋಧನವು
ಹರ್ಷಧ್ವನಿಯಾಗಿ ಮಾರ್ಪಟ್ಟಿತು. ಮೊರ್ದೆಕೈಯು ಎಲ್ಲಾ
ಯೆಹೂದ್ಯರಿಗೆ ಪತ್ರ ಬರೆಯಿಸಿದನು. ಆ ದಿವಸದಲ್ಲಿ
ಹಬ್ಬವನ್ನು ಆಚರಿಸಿ ಒಬ್ಬರಿಗೊಬ್ಬರು ಉಡುಗೊರೆ
ಗಳನ್ನು ಕೊಡಬೇಕು ಮತ್ತು ಬಡವರಿಗೂ ಉಡುಗೊರೆ
ಗಳನ್ನು ಕೊಡಬೇಕು ಎಂಬುದಾಗಿ ಬರೆಯಿಸಿದನು.
23 ಮೊರ್ದೆಕೈ ಪತ್ರದಲ್ಲಿ ಬರೆದದ್ದನ್ನು ಯೆಹೂದ್ಯರು
ಒಪ್ಪಿಕೊಂಡು ಆ ವರ್ಷದಲ್ಲಿ ನಡೆದ ಉತ್ಸವವು ತಮ್ಮಲ್ಲಿ
ವಾರ್ಷಿಕೋತ್ಸವವಾಗಬೇಕೆಂದು ನಿರ್ಧರಿಸಿದರು.
24 ಅಗಾಗನ ವಂಶದವನಾದ ಹಮ್ಮೆದಾತನ ಮಗನಾದ
ಹಾಮಾನನು ಸಮಸ್ತ ಯೆಹೂದ್ಯರ ಶತ್ರುವಾಗಿದ್ದನು.
ಯೆಹೂದ್ಯರನ್ನೆಲ್ಲಾ ಸಂಹರಿಸಲು ಆತನು ಒಂದು ದುಷ್ಟ
ಹಂಚಿಕೆಯನ್ನು ಹೂಡಿದನು; ಮತ್ತು ಆ ನಿರ್ಧಿಷ್ಟ ದಿನ
ಕ್ಕಾಗಿ ಅವನು ಚೀಟು ಹಾಕಿದನು. ಆ ದಿವಸಗಳಲ್ಲಿ ಚೀಟು
ಹಾಕುವುದಕ್ಕೆ ''ಪೂರ್'' ಎಂದು ಹೇಳುತ್ತಿದ್ದರು. ಹಾಗೆ
ಆ ಹಬ್ಬವು ''ಪೂರಿಮ್'' ಎಂಬ ಹೆಸರಿನಿಂದ ಕರೆಯ
ಲ್ಪಟ್ಟಿತು. 25 ಹಾಮಾನನ ಕುತಂತ್ರವನ್ನು ಎಸ್ತೇರ್
ರಾಣಿಯು ರಾಜನ ಸಂಗಡ ಮಾತಾಡುವುದರ ಮೂಲಕ
ನಿರರ್ಥಕಗೊಳಿಸಿ. ಅವನಿಗೂ ಅವನ ಕುಟುಂಬಕ್ಕೂ
ಮರಣವಾಗುವಂತೆ ಮಾಡಿದಳು. ಹಾಮಾನನೂ ಅವನ
ಗಂಡು ಮಕ್ಕಳೂ ಗಲ್ಲಿಗೇರಿಸಲ್ಪಟ್ಟರು.
26-27 ಚೀಟು ಹಾಕುವುದಕ್ಕೆ ''ಪೂರಿಮ್'' ಎಂದು
ಕರೆಯುತ್ತಿದ್ದುದರಿಂದ ಈ ಹಬ್ಬಕ್ಕೆ ''ಪೂರಿಮ್'' ಎಂದು
ಹೆಸರಿಟ್ಟರು. ಮೊರ್ದೆಕೈ ಈ ಹಬ್ಬವನ್ನು ಆಚರಿಸಲು
ಯೆಹೂದ್ಯರೆಲ್ಲರಿಗೆ ಪತ್ರದ ಮೂಲಕ ತಿಳಿಸಿದನು. ಅಂದಿ
ನಿಂದ ಪ್ರತಿ ವರುಷ ಈ ಎರಡು ದಿನಗಳಲ್ಲಿ ಹಬ್ಬವನ್ನು
ಆಚರಿಸುವ ಕ್ರಮವನ್ನು ಇಟ್ಟುಕೊಂಡರು. 28 ತಮ್ಮ
ವೈರಿಗಳಿಗಾಗುವ ದಂಡನೆಯನ್ನು ಅವರು ಈ ಹಬ್ಬದ
ಸಮಯದಲ್ಲಿ ಜ್ಞಾಪಕ ಮಾಡಿಕೊಳ್ಳುವರು. ಯೆಹೂದ್ಯರ
ಎಲ್ಲಾ ಗೋತ್ರಗಳವರು ಮತ್ತು ಅವರ ಪ್ರಾಂತ್ಯಗಳ
ಲ್ಲಿರುವವರು ಈ ದಿನಗಳನ್ನು ಪ್ರತಿ ವರುಷ ಸರಿಯಾದ
ಸಮಯದಲ್ಲಿ ಸರಿಯಾದ ರೀತಿಯಲ್ಲಿ ಈ ಹಬ್ಬವನ್ನು ಪ್ರತಿ
ಯೊಂದು ಪ್ರಾಂತ್ಯಗಳಲ್ಲಿಯೂ ಪ್ರತಿಯೊಂದು ಊರು
ಗಳಲ್ಲಿಯೂ ನೆನಪುಮಾಡಿಕೊಳ್ಳುವರು. ಇಂದಿಗೂ
ಯೆಹೂದ್ಯರು ಈ ದಿನಗಳನ್ನು ನೆನಪುಮಾಡಿಕೊಂಡು
ಪೂರಿಮ್ ಹಬ್ಬವನ್ನು ಆಚರಿಸುತ್ತಾರೆ.
29 ಹಾಗೆ ಅಬೀಹೈಲನ ಮಗಳಾದ ಎಸ್ತೇರ್ ರಾಣಿಯು
ಮತ್ತು ಯೆಹೂದಿಯಾದ ಮೊರ್ದೆಕೈಯು ಈ ಪೂರಿಮ್
ಹಬ್ಬದ ಬಗ್ಗೆ ಒಂದು ಅಧಿಕೃತ ಪತ್ರವನ್ನು ಬರೆಯಿಸಿದರು.
ಜನರು ಅವರ ಎರಡನೆಯ ಪತ್ರವನ್ನು ಸತ್ಯವೆಂದು
ನಂಬುವ ಹಾಗೆ ರಾಜ ಮುದ್ರೆಯೊಂದಿಗೆ ಕಳುಹಿಸಿದರು.
30 ಅರಸನ ನೂರಿಪ್ಪತ್ತೇಳು ಸಂಸ್ಥಾನಗಳಲ್ಲಿರುವ ಯೆಹೂ
ದ್ಯರಿಗೆಲ್ಲಾ ಪತ್ರವನ್ನು ಕಳುಹಿಸಿದನು. ಅದರಲ್ಲಿ ಆ ಹಬ್ಬವು
ಜನರ ಮಧ್ಯದಲ್ಲಿ ಸಮಾಧಾನ ಹುಟ್ಟಿಸಿ ಒಬ್ಬರ ಮೇಲೊ
ಬ್ಬರ ಮೇಲೆ ನಂಬಿಕೆ ಬೆಳೆಸುವುದು ಎಂದು ಬರೆದಿದ್ದನು.
31 ಮತ್ತು ಪತ್ರದಲ್ಲಿ ಪೂರಿಮ್ ಹಬ್ಬವನ್ನು ಆಚರಿಸಲು
ಪ್ರಾರಂಭಿಸಿರಿ ಎಂದೂ ಬರೆದಿದ್ದನು. ಈ ಹಬ್ಬವನ್ನು
ಯಾವ ದಿನ ಆಚರಿಸಬೇಕು? ಎಂಬುದನ್ನೂ ನಮೂದಿ
ಸಿದನು. ಈ ಎರಡು ವಿಶ್ರಾಂತಿ ದಿನಗಳನ್ನು ತಮಗೂ ತಮ್ಮ
ಸಂತಾನಗಳವರಿಗೂ ಖಾಯಂಗೊಳಿಸಲು ಯೆಹೂದಿ
ಯಾದ ಮೊರ್ದೆಕೈಯೂ ರಾಣಿ ಎಸ್ತೇರಳೂ ಯೆಹೂದ್ಯ
ರಿಗೆ ಒಂದು ಆಜ್ಞೆಯನ್ನು ಹೊರಡಿಸಿದರು. ತಮಗೆ
ಸಂಬಂಧಿಸಿದ ಕೆಟ್ಟಸಂಗತಿಗಳನ್ನು ನೆನಪಿಗೆ ತಂದು
ಕೊಂಡು ಬೇರೆ ವಿಶ್ರಾಂತಿ ದಿನಗಳಲ್ಲಿ ಉಪವಾಸವಿದ್ದು
ಗೋಳಾಡುವಂತೆ ಈ ಹಬ್ಬದ ದಿನಗಳಲ್ಲಿಯೂ ಅವರು
ಮಾಡುವರು. 32 ಎಸ್ತೇರಳ ಈ ಆಜ್ಞೆಯು ಅಧಿಕೃತ
ವಾಗಿದ್ದು ಪುಸ್ತಕದಲ್ಲಿ ಬರೆಯಲ್ಪಟ್ಟಿತ್ತು.

## ಮೊರ್ದೆಕೈಯನ್ನು ಗೌರವಿಸಿದ್ದು

10 ಅಹಷ್ವೇರೋಷ್ ರಾಜನು ತನ್ನ ಪ್ರಜೆಗಳಿಂದ
ತೆರಿಗೆಯನ್ನು ಎತ್ತಿದನು. ಅವನ ಸಾಮ್ರಾಜ್ಯದ
ಪ್ರಜೆಗಳೆಲ್ಲರೂ ಹಾಗೂ ದೂರದ ಕರಾವಳಿಯ ನಗರ
ವಾಸಿಗಳೂ, ತೆರಿಗೆಯನ್ನು ಕಟ್ಟಲೇ ಬೇಕಾಯಿತು.
2 ಅಹಷ್ವೇರೋಷ್ ಅರಸನು ಮಾಡಿದ ಎಲ್ಲಾ
ಮಹತ್ಕಾರ್ಯಗಳೂ ಕೃತ್ಯಗಳೂ ಮೇದ್ಯ ಪರ್ಶಿಯ
ಅರಸರ ರಾಜಕಾಲವೃತ್ತಾಂತ ಪುಸ್ತಕಗಳಲ್ಲಿ ಬರೆಯಲ್ಪ
ಟ್ಟಿರುತ್ತವೆ. ಮತ್ತು ಮೊರ್ದೆಕೈ ಮಾಡಿದ ವಿಷಯಗಳ
ಬಗ್ಗೆಯೂ ಬರೆಯಲ್ಪಟ್ಟಿದೆ. ಮೊರ್ದೆಕೈಯನ್ನು ಅರಸನು
ಬಹು ದೊಡ್ಡ ಪ್ರಭಾವಶಾಲಿ ವ್ಯಕ್ತಿಯನ್ನಾಗಿ ಮಾಡಿದನು.
3 ಅರಸನ ನಂತರ ರಾಜ್ಯದಲ್ಲಿ ಯೆಹೂದಿಯಾದ
ಮೊರ್ದೆಕೈಯೇ ಮುಖ್ಯ ವ್ಯಕ್ತಿಯಾಗಿದ್ದನು. ರಾಜ್ಯದಲ್ಲಿ
ಅವನಿಗೆ ಎರಡನೇ ಸ್ಥಾನವಿತ್ತು. ಯೆಹೂದ್ಯರೊಳಗೆ
ಅವನು ಪ್ರಮುಖ ವ್ಯಕ್ತಿಯಾಗಿದ್ದನು. ಯೆಹೂದ್ಯ
ರೆಲ್ಲರೂ ಅವನನ್ನು ಬಹಳವಾಗಿ ಗೌರವಿಸುತ್ತಿದ್ದರು. ತನ್ನ
ಜನರ ಒಳಿತಿಗಾಗಿ ( ಜನರಿಗೋಸ್ಕರವಾಗಿ) ಮೊರ್ದೆಕೈ
ಬಹಳವಾಗಿ ಪ್ರಯಾಸಪಟ್ಟಿದ್ದರಿಂದ ಜನರು ಅವನನ್ನು
ಸನ್ಮಾನಿಸಿದರು; ಮೊರ್ದೆಕೈ ಯೆಹೂದ್ಯರೆಲ್ಲರಿಗೆ
ಸಮಾಧಾನವನ್ನು ತಂದನು.

# ಯೋಬನು

### ಒಳ್ಳೆಯ ಮನುಷ್ಯನಾದ ಯೋಬನು

1 ಊಚ್ ದೇಶದಲ್ಲಿ ಯೋಬನೆಂಬ ಒಬ್ಬಮನುಷ್ಯ
ನಿದ್ದನು. ಅವನು ದೇವರಲ್ಲಿ ಭಯಭಕ್ತಿಯುಳ್ಳವ
ನಾಗಿದ್ದನು; ಕೆಟ್ಟಕಾರ್ಯಗಳನ್ನು ಮಾಡದೆ ನಿರ್ದೋ
ಷಿಯೂ ಯಥಾರ್ಥವಂತನೂ ಆಗಿದ್ದನು. 2 ಯೋಬನಿಗೆ
ಏಳು ಮಂದಿ ಗಂಡುಮಕ್ಕಳೂ ಮೂವರು ಹೆಣ್ಣುಮಕ್ಕಳೂ
ಇದ್ದರು. 3 ಯೋಬನಿಗೆ ಏಳು ಸಾವಿರ ಕುರಿಗಳಿದ್ದವು;
ಮೂರು ಸಾವಿರ ಒಂಟೆಗಳಿದ್ದವು, ಒಂದು ಸಾವಿರ ಎತ್ತು
ಗಳಿದ್ದವು* ಮತ್ತು ಐನೂರು ಹೆಣ್ಣುಕತ್ತೆಗಳಿದ್ದವು. ಅವ
ನಿಗೆ ಅನೇಕ ಮಂದಿ ಸೇವಕರಿದ್ದರು. ಪೂರ್ವದೇಶದವ
ರಲ್ಲೆಲ್ಲಾ ಯೋಬನು ಮಹಾ ಐಶ್ವರ್ಯವಂತನಾಗಿದ್ದನು.
4 ಯೋಬನ ಗಂಡುಮಕ್ಕಳು ಯಾವಾಗಲೂ ಸರದಿಯ
ಪ್ರಕಾರ ಔತಣಕೂಟಗಳನ್ನು ತಮ್ಮ ಮನೆಗಳಲ್ಲಿ ಏರ್ಪಡಿ
ಸುತ್ತಿದ್ದರು; ಆ ಔತಣಕೂಟಗಳಿಗೆ ತಮ್ಮ ಸಹೋದರಿಯ
ರನ್ನು ಸಹ ಆಹ್ವಾನಿಸುತ್ತಿದ್ದರು. 5 ಪ್ರತಿಯೊಂದು ಔತಣ
ಕೂಟದ ದಿನಗಳು ಮುಗಿದ ಮೇಲೆ ಯೋಬನು ಅವರನ್ನು
ಶುದ್ಧೀಕರಿಸುತ್ತಿದ್ದನು. ಅದಕ್ಕಾಗಿ ಅವನು ಮುಂಜಾನೆಯ
ಲ್ಲಿಯೇ ಎದ್ದು ತನ್ನ ಪ್ರತಿಯೊಬ್ಬ ಮಕ್ಕಳ ಹೆಸರಿನಲ್ಲಿ
ಒಂದೊಂದು ಸರ್ವಾಂಗಹೋಮವನ್ನು ಅರ್ಪಿಸುತ್ತಿ
ದ್ದನು. ಯಾಕಂದರೆ, ‘‘ಒಂದುವೇಳೆ ನನ್ನ ಮಕ್ಕಳು
ಹೃದಯದಲ್ಲಿ ದೇವರನ್ನು ದೂಷಿಸಿ ಪಾಪಮಾಡಿರ
ಬಹುದು’’ ಎಂಬುದು ಯೋಬನ ಆಲೋಚನೆ
ಯಾಗಿತ್ತು. ತನ್ನ ಮಕ್ಕಳ ಪಾಪಕ್ಷಮೆಗಾಗಿ ಯೋಬನು
ಯಾವಾಗಲೂ ಹೀಗೆ ಮಾಡುತ್ತಿದ್ದನು.

### ಯೋಬನಿಗೆ ಮೊದಲ ಪರೀಕ್ಷೆ

6 ದೇವದೂತರುಗಳು ಯೆಹೋವನನ್ನು ಭೇಟಿ
ಯಾಗುವ ದಿನ ಬಂದಿತು. ಆಗ ಸೈತಾನನು* ಸಹ ಆ
ದೂತರುಗಳೊಂದಿಗೆ ಬಂದನು. 7 ಯೆಹೋವನು ಸೈತಾನ
ನಿಗೆ, ‘‘ನೀನು ಎಲ್ಲಿಗೆ ಹೋಗಿದ್ದೆ?’’ಎಂದು ಕೇಳಿದನು.
ಸೈತಾನನು ಯೆಹೋವನಿಗೆ, ‘‘ನಾನು ಭೂಮಿಯ
ಮೇಲೆಲ್ಲಾ ಅಲೆದಾಡುತ್ತಿದ್ದೆ’’ಎಂದು ಉತ್ತರಕೊಟ್ಟನು.
8 ಆಗ ಯೆಹೋವನು, ‘‘ನನ್ನ ಸೇವಕನಾದ ಯೋಬನ
ಬಗ್ಗೆ ಆಲೋಚಿಸಿದೆಯಾ? ಭೂಮಿಯ ಮೇಲೆ ಅವನಂತೆ
ಯಾರೂ ಇಲ್ಲ. ಅವನು ದೇವರಲ್ಲಿ ಭಯಭಕ್ತಿಯುಳ್ಳವ
ನಾಗಿದ್ದಾನೆ; ಕೆಟ್ಟ ಕಾರ್ಯಗಳನ್ನು ಮಾಡದೆ
ನಿರ್ದೋಷಿಯೂ ಯಥಾರ್ಥವಂತನೂ ಆಗಿದ್ದಾನೆ’’
ಎಂದು ಹೇಳಿದನು.

9 ಅದಕ್ಕೆ ಸೈತಾನನು, ‘‘ಹೌದು! ಯೋಬನು ದೇವರಲ್ಲಿ
ಭಯಭಕ್ತಿಯಿಟ್ಟಿರುವುದಕ್ಕೆ ಒಳ್ಳೆಯ ಕಾರಣವೊಂದಿದೆ!
10 ನೀನು ಅವನನ್ನೂ ಅವನ ಕುಟುಂಬವನ್ನೂ ಅವನ ಆಸ್ತಿ
ಯನ್ನೂ ಸಂರಕ್ಷಿಸುತ್ತಿರುವೆ. ಅವನ ಕೆಲಸಕಾರ್ಯಗಳನ್ನು
ಸಫಲಪಡಿಸುತ್ತಿರುವುದರಿಂದ ಅವನ ಸಂಪತ್ತು ದೇಶದ
ಲ್ಲೆಲ್ಲಾ ಅಭಿವೃದ್ಧಿಯಾಗುತ್ತಿದೆ. 11 ಆದರೆ ಈಗ ನೀನು ನಿನ್ನ
ಕೈಚಾಚಿ ಅವನ ಆಸ್ತಿಯನ್ನೆಲ್ಲಾ ನಾಶಮಾಡು. ಆಗ ಅವನು
ನಿನ್ನ ಮುಖದೆದುರಿಗೆ ನಿನ್ನನ್ನು ದೂಷಿಸುವನು’’ಎಂದು
ಉತ್ತರಕೊಟ್ಟನು.

12 ಯೆಹೋವನು ಸೈತಾನನಿಗೆ, ‘‘ಸರಿ, ಯೋಬನ ಆಸ್ತಿ
ಗೆಲ್ಲಾ ನೀನು ಏನು ಬೇಕಾದರೂ ಮಾಡು. ಆದರೆ ಅವನ
ದೇಹಕ್ಕೆ ಮಾತ್ರ ನೋವನ್ನು ಮಾಡಬೇಡ’’ ಎಂದು
ಹೇಳಿದನು.

ಬಳಿಕ ಸೈತಾನನು ಯೆಹೋವನ ಬಳಿಯಿಂದ ಹೊರಟು
ಹೋದನು.

### ಯೋಬನಿಗಾದ ಸರ್ವನಾಶ

13 ಒಂದು ದಿನ, ಯೋಬನ ಗಂಡುಹೆಣ್ಣುಮಕ್ಕಳು ತಮ್ಮ
ಹಿರಿಯ ಅಣ್ಣನ ಮನೆಯಲ್ಲಿ ಊಟಮಾಡುತ್ತಾ ದ್ರಾಕ್ಷಾ
ರಸ ಕುಡಿಯುತ್ತಾ ಇದ್ದರು. 14 ಆಗ ಸೇವಕನೊಬ್ಬನು
ಯೋಬನ ಬಳಿಗೆ ಬಂದು, ‘‘ಎತ್ತುಗಳು ಉಳುತ್ತಿದ್ದವು;
ಕತ್ತೆಗಳು ಸಮೀಪದಲ್ಲಿ ಹುಲ್ಲನ್ನು ಮೇಯುತ್ತಿದ್ದವು.

---

**ಒಂದು ಸಾವಿರ ಎತ್ತುಗಳಿದ್ದವು** ಅಕ್ಷರಶಃ, ‘‘ಐನೂರು ಜೋಡಿ ಎತ್ತುಗಳಿದ್ದವು.

**ಸೈತಾನನು** ಸೈತಾನನು ಒಬ್ಬ ದೇವದೂತನು. ಇವನು ಮನುಷ್ಯರ ವೈರಿ. ಇವನು ಮನುಷ್ಯರನ್ನು ಶೋಧನೆಗೆ ಗುರಿಪಡಿಸಿ, ದೇವರ ಮುಂದೆ ಅವರ ಮೇಲೆ ಅಪವಾದ ಹೊರಿಸುತ್ತಾನೆ.

15ಆದರೆ ಶೆಬ ದೇಶದವರು ನಮ್ಮ ಮೇಲೆ ಆಕ್ರಮಣ
ಮಾಡಿ ನಿನ್ನ ಪಶುಗಳನ್ನೆಲ್ಲಾ ಹೊಡೆದುಕೊಂಡು
ಹೋದರು; ನಿನ್ನ ಸೇವಕರುಗಳನ್ನೆಲ್ಲಾ ಕೊಂದು ಹಾಕಿ
ದರು; ನಾನೊಬ್ಬನು ಮಾತ್ರ ತಪ್ಪಿಸಿಕೊಂಡೆನು! ಈ
ವಿಷಯವನ್ನು ತಿಳಿಸುವುದಕ್ಕಾಗಿಯೇ ನಾನು ಬಂದೆನು''
ಎಂದು ಹೇಳಿದನು.
16ಆ ಸೇವಕನು ಮಾತಾಡುತ್ತಿರುವಾಗಲೇ ಮತ್ತೊಬ್ಬ
ಸೇವಕನು ಬಂದು ಯೋಬನಿಗೆ, ''ಆಕಾಶದಿಂದ ಸಿಡಿ
ಲೊಡೆದು ನಿನ್ನ ಕುರಿಗಳನ್ನೂ ಸೇವಕರುಗಳನ್ನೂ
ಸಂಪೂರ್ಣವಾಗಿ ಸುಟ್ಟುಹಾಕಿತು. ನಾನೊಬ್ಬನು ಮಾತ್ರ
ತಪ್ಪಿಸಿಕೊಂಡೆನು! ಇದನ್ನು ತಿಳಿಸುವುದಕ್ಕಾಗಿಯೇ ನಾನು
ಬಂದೆನು'' ಎಂದು ಹೇಳಿದನು.
17ಆ ಸೇವಕನು ಮಾತಾಡುತ್ತಿರುವಾಗಲೇ ಮತ್ತೊಬ್ಬ
ಸೇವಕನು ಬಂದು ಯೋಬನಿಗೆ, ''ಕಸ್ದೀಯರು ಮೂರು
ಗುಂಪುಗಳಾಗಿ ಬಂದು, ನಮ್ಮ ಮೇಲೆ ಆಕ್ರಮಣಮಾಡಿ,
ಒಂಟೆಗಳನ್ನು ಹೊಡೆದುಕೊಂಡು ಹೋದರು! ಅಲ್ಲದೆ
ನಿನ್ನ ಸೇವಕರುಗಳನ್ನು ಕೊಂದುಹಾಕಿದರು. ನಾನೊ
ಬ್ಬನು ಮಾತ್ರ ತಪ್ಪಿಸಿಕೊಂಡೆನು. ಇದನ್ನು ನಿನಗೆ ತಿಳಿಸು
ವುದಕ್ಕಾಗಿಯೇ ಬಂದೆನು'', ಎಂದು ಹೇಳಿದನು.
18ಮೂರನೆಯ ಸೇವಕನು ಮಾತಾಡುತ್ತಿರುವಾಗಲೇ
ಮತ್ತೊಬ್ಬ ಸೇವಕನು ಬಂದು ಯೋಬನಿಗೆ, ''ನಿನ್ನ ಗಂಡು
ಹೆಣ್ಣುಮಕ್ಕಳು ತಮ್ಮ ಹಿರಿಯ ಅಣ್ಣನ ಮನೆಯಲ್ಲಿ ಊಟ
ಮಾಡುತ್ತಾ ದ್ರಾಕ್ಷಾರಸ ಕುಡಿಯುತ್ತಾ ಇದ್ದರು. 19ಆಗ
ಇದ್ದಕ್ಕಿದ್ದಂತೆ ಮರುಭೂಮಿಯಿಂದ ಬಿರುಗಾಳಿ ಬೀಸಿದ್ದ
ರಿಂದ ಮನೆಯು ನಿನ್ನ ಗಂಡುಹೆಣ್ಣುಮಕ್ಕಳ ಮೇಲೆ
ಕುಸಿದು ಬಿದ್ದಿತು; ಅವರೆಲ್ಲಾ ಸತ್ತುಹೋದರು. ನಾನೊ
ಬ್ಬನು ಮಾತ್ರ ತಪ್ಪಿಸಿಕೊಂಡೆನು! ಇದನ್ನು ನಿನಗೆ ತಿಳಿಸು
ವುದಕ್ಕಾಗಿಯೇ ಬಂದೆನು'' ಎಂದು ಹೇಳಿದನು.
20ಆಗ ಯೋಬನು ತನ್ನ ಮೇಲಂಗಿಯನ್ನು ಹರಿದು
ಕೊಂಡು ತಲೆಯನ್ನು ಬೋಳಿಸಿಕೊಂಡು ನೆಲದ ಮೇಲೆ
ಮೊಣಕಾಲೂರಿ ದೇವರಿಗೆ ಸ್ತೋತ್ರಸಲ್ಲಿಸುತ್ತಾ,

21''ನಾನು ತಾಯಿಯ ಗರ್ಭದಿಂದ ಜನಿಸಿದಾಗ
ಏನೂ ಇಲ್ಲದವನಾಗಿದ್ದೆನು; ಈ ಲೋಕವನ್ನು
ಬಿಟ್ಟು ಹೋಗುವಾಗಲೂ ಏನೂ ಇಲ್ಲದವ
ನಾಗಿಯೇ ಹೋಗುವೆನು. ಯೆಹೋವನೇ
ಕೊಟ್ಟನು; ಯೆಹೋವನೇ ತೆಗೆದುಕೊಂಡನು.
ಆತನ ನಾಮಕ್ಕೆ ಸ್ತೋತ್ರವಾಗಲಿ!'' ಎಂದು
ಹೇಳಿದನು.

22ಇಷ್ಟೆಲ್ಲಾ ಕಳೆದುಕೊಂಡರೂ ಯೋಬನು ಪಾಪ
ಮಾಡಲಿಲ್ಲ; ದೇವರನ್ನು ದೂಷಿಸಲಿಲ್ಲ.

## ಯೋಬನಿಗೆ ಎರಡನೆ ಪರೀಕ್ಷೆ

2 ಮತ್ತೊಂದು ದಿನ ಯೆಹೋವನನ್ನು ಭೇಟಿ
ಯಾಗಲು ದೇವದೂತರು ಬಂದರು. ಸೈತಾನನು ಸಹ
ಯೆಹೋವನನ್ನು ಭೇಟಿಯಾಗಲು ಅವರೊಂದಿಗೆ
ಬಂದನು. 2ಯೆಹೋವನು ಸೈತಾನನಿಗೆ, ''ನೀನು ಎಲ್ಲಿಂದ
ಬರುತ್ತಿರುವೆ?'' ಎಂದು ಕೇಳಿದನು.
ಸೈತಾನನು ಯೆಹೋವನಿಗೆ, ''ನಾನು ಭೂಮಿಯ
ಮೇಲೆಲ್ಲಾ ಅಲೆದಾಡುತ್ತಾ ಬಂದೆನು''ಎಂದು ಉತ್ತರ
ಕೊಟ್ಟನು.
3ಅದಕ್ಕೆ ಯೆಹೋವನು, ''ನನ್ನ ಸೇವಕನಾದ ಯೋಬ
ನನ್ನು ಗಮನಿಸಿದೆಯಾ? ಭೂಮಿಯ ಮೇಲೆ ಅವನಂತೆ
ಯಾರೂ ಇಲ್ಲ. ಅವನು ದೇವರಲ್ಲಿ ಭಯಭಕ್ತಿಯುಳ್ಳವ
ನಾಗಿದ್ದಾನೆ; ಕೆಟ್ಟ ಕಾರ್ಯಗಳನ್ನು ಮಾಡದೆ
ನಿರ್ದೋಷಿಯೂ ಯಥಾರ್ಥವಂತನೂ ಆಗಿದ್ದಾನೆ.
ನಿಷ್ಕಾರಣವಾಗಿ ಅವನನ್ನು ನಾಶಪಡಿಸುವಂತೆ ನೀನು
ನನ್ನನ್ನು ಒತ್ತಾಯಪಡಿಸಿದೆ. ಆದರೆ ಅವನು ನನಗೆ ಇನ್ನೂ
ನಂಬಿಗಸ್ತನಾಗಿದ್ದಾನೆ'' ಎಂದು ಹೇಳಿದನು.
4ಅದಕ್ಕೆ ಸೈತಾನನು, ''ಚರ್ಮಕ್ಕೆ ಚರ್ಮ!''* ಎಂಬಂತೆ
ಮನುಷ್ಯನು ತನ್ನ ಪ್ರಾಣವನ್ನು ಉಳಿಸಿಕೊಳ್ಳುವುದಕ್ಕೆ ತನ್ನ
ಸರ್ವಸ್ವವನ್ನೂ ಕೊಡುವನು. 5ಆದರೆ ನೀನು ಕೈಚಾಚಿ
ಅವನ ಮಾಂಸವನ್ನೂ ಮೂಳೆಗಳನ್ನೂ ಹೊಡೆ. ಅವನು
ನಿನ್ನ ಮುಖದೆದುರಿಗೆ ನಿನ್ನನ್ನು ದೂಷಿಸೇ ದೂಷಿಸುವನು''
ಎಂದು ಉತ್ತರಕೊಟ್ಟನು.
6ಅದಕ್ಕೆ ಯೆಹೋವನು ಸೈತಾನನಿಗೆ, ''ಸರಿ, ಯೋಬ
ನನ್ನು ನಿನ್ನ ಕೈಗೆ ಒಪ್ಪಿಸಿದ್ದೇನೆ; ಆದರೆ ಅವನ ಪ್ರಾಣವನ್ನು
ಮಾತ್ರ ತೆಗೆಯಬೇಡ'' ಎಂದು ಹೇಳಿದನು.
7ಆಗ ,ಸೈತಾನನು ಯೆಹೋವನ ಬಳಿಯಿಂದ ಹೊರಟು
ಹೋಗಿ ಯೋಬನಿಗೆ ಬಾಧಿಸುವ ಕುರುಗಳನ್ನು ಹುಟ್ಟಿಸಿ
ದನು. ಯೋಬನ ದೇಹದ ಮೇಲೆಲ್ಲಾ ಅಂದರೆ ಅವನ
ಪಾದದಿಂದಿಡಿದು ತಲೆಯ ಮೇಲ್ಭಾಗದವರೆಗೂ ಬಾಧಿ
ಸುವ ಕುರುಗಳು ತುಂಬಿಕೊಂಡವು. 8ಯೋಬನು ಬೂದಿ
ಯಲ್ಲಿ ಕುಳಿತುಕೊಂಡು ತನ್ನ ಕುರುಗಳನ್ನು ಮಡಕೆಯ
ಚೂರಿನಿಂದ ಕೆರೆದುಕೊಳ್ಳುತ್ತಿದ್ದನು. 9ಯೋಬನ ಹೆಂಡ
ತಿಯು ಅವನಿಗೆ, ''ನೀನು ಇನ್ನೂ ದೇವರಿಗೆ ನಂಬಿಗಸ್ತ
ನಾಗಿರುವೆಯೋ? ದೇವರನ್ನು ದೂಷಿಸಿ ಸಾಯಿ'' ಎಂದು
ಹೇಳಿದಳು.
10ಯೋಬನು ತನ್ನ ಹೆಂಡತಿಗೆ, ''ನೀನು ಮೂರ್ಖಳಂತೆ
ಮಾತಾಡುತ್ತಿರುವೆ! ದೇವರು ಒಳ್ಳೆಯವುಗಳನ್ನು ಕೊಡು
ವಾಗ ನಾವು ಅವುಗಳನ್ನು ಸ್ವೀಕರಿಸಿಕೊಳ್ಳುತ್ತೇವೆ. ಆತನು
ಕೆಟ್ಟದ್ದನ್ನು ಕೊಡುವಾಗ ನಾವು ಸ್ವೀಕರಿಸಿಕೊಳ್ಳ

---

**ಚರ್ಮಕ್ಕೆ ಚರ್ಮ** ಇದರರ್ಥವೇನಂದರೆ, ಮನುಷ್ಯನು ನೋವಿನಿಂದ ತಪ್ಪಿಸಿಕೊಳ್ಳಲು ತನಗೆ ಸಾಧ್ಯವಾದದ್ದನ್ನೆಲ್ಲಾ ಮಾಡುತ್ತಾನೆ.

ಬಾರದೋ? ಎಂದು ಉತ್ತರಕೊಟ್ಟನು. ಈ ಸಂಕಟ ದಲ್ಲಿಯೂ ಯೋಬನು ಪಾಪ ಮಾಡಲಿಲ್ಲ ಹಾಗೂ ದೇವರ ವಿರುದ್ಧ ಯಾವ ಮಾತನ್ನು ಆಡಲಿಲ್ಲ.

### ಯೋಬನ ಮೂವರು ಸ್ನೇಹಿತರು

11 ಯೋಬನ ಮೂವರು ಗೆಳೆಯರು ಯಾರೆಂದರೆ: ತೇಮಾನಿನ ಎಲೀಫಜನು, ಶೂಹ್ಯದ ಬಿಲ್ದದನು ಮತ್ತು ನಾಮಾಥ್ಯದ ಚೋಫರನು. ಯೋಬನಿಗೆ ಸಂಭವಿಸಿದ ಆಪತ್ತುಗಳ ಬಗ್ಗೆ ಈ ಮೂವರು ಗೆಳೆಯರು ಕೇಳಿದಾಗ ತಮ್ಮ ಮನೆಯಿಂದ ಹೊರಟು ಒಟ್ಟಾಗಿ ಭೇಟಿಯಾದರು. ಯೋಬನ ಬಳಿಗೆ ಹೋಗಿ ಅನುತಾಪ ಸೂಚಿಸಿ ಸಂತೈಸಲು ಒಪ್ಪಿಕೊಂಡರು.
12 ಆದರೆ ಆ ಮೂವರು ಸ್ನೇಹಿತರು ಬಹು ದೂರದಿಂದ ಯೋಬನನ್ನು ಕಂಡಾಗ ಅವನ ಗುರುತೇ ಹಿಡಿಯಲಾರದೆ ಗಟ್ಟಿಯಾಗಿ ಅಳತೊಡಗಿದರು; ತಮ್ಮ ಮೇಲಂಗಿಗಳನ್ನು ಹರಿದುಕೊಂಡು ಧೂಳನ್ನು ಮೇಲಕ್ಕೆ ತೂರಿ ತಮ್ಮ ತಲೆಗಳ ಮೇಲೆ ಸುರಿಸಿಕೊಂಡರು.
13 ಬಳಿಕ ಆ ಮೂವರು ಸ್ನೇಹಿತರು ಏಳುದಿನ ಹಗಲಿರುಳು ಯೋಬನೊಂದಿಗೆ ನೆಲದ ಮೇಲೆ ಕುಳಿತುಕೊಂಡಿದ್ದರು. ಯೋಬನು ವಿಪರೀತ ನೋವಿನಲ್ಲಿದ್ದ ಕಾರಣ ಅವರು ಒಂದು ಮಾತನ್ನೂ ಅವನಿಗೆ ಹೇಳಲಿಲ್ಲ.

### ಯೋಬನು ತನ್ನ ಜನ್ಮದಿನವನ್ನು ಶಪಿಸುವನು

3 ಬಳಿಕ ಯೋಬನು ಬಾಯಿ ತೆರೆದು ತನ್ನ ಜನ್ಮ ದಿನವನ್ನು ಶಪಿಸಿ ಇಂತೆಂದನು:

2-3 "ನಾನು ಹುಟ್ಟಿದ ದಿನವು ಹಾಳಾಗಲಿ, 'ಗಂಡು ಮಗುವು ಗರ್ಭಧರಿಸಿತು' ಎಂದು ಹೇಳಿದ ಆ ರಾತ್ರಿಯು ನಾಶವಾಗಲಿ.

4 ಆ ದಿನವು ಕತ್ತಲೆಯಾಗಲಿ. ಆ ದಿನದ ಬಗ್ಗೆ ಮೇಲ್ಲೋಕದ ದೇವರು ಯೋಚಿಸದಿರಲಿ. ಆ ದಿನದ ಮೇಲೆ ಬೆಳಕು ಬೆಳಗದಿರಲಿ.

5 ಆ ದಿನವನ್ನು ಕತ್ತಲೆಯೂ ಮರಣದ ನೆರಳೂ ವಶಪಡಿಸಿಕೊಳ್ಳಲಿ. ಆ ದಿನವನ್ನು ಮೋಡವು ಕವಿದುಕೊಳ್ಳಲಿ. ನಾನು ಹುಟ್ಟಿದ ದಿನದ ಹಗಲನ್ನು ಗ್ರಹಣಗಳು ಭಯಪಡಿಸಲಿ.

6 ಕಾರ್ಗತ್ತಲೆಯು ಆ ರಾತ್ರಿಯನ್ನು ಆವರಿಸಿಕೊಳ್ಳಲಿ. ಆ ರಾತ್ರಿಯು ವರ್ಷದ ದಿನಗಳಲ್ಲಿ ಒಂದೆಂದು ಲೆಕ್ಕಿಸಲ್ಪಡದಿರಲಿ; ಅದು ಯಾವ ತಿಂಗಳುಗಳಲ್ಲೂ ಸೇರಿಸಲ್ಪಡದಿರಲಿ.

7 ಆ ರಾತ್ರಿಯು ಬಂಜೆಯಾಗಲಿ; ಅದರಲ್ಲಿ ಯಾವ ಉತ್ಸಾಹ ಧ್ವನಿಯೂ ಕೇಳದಿರಲಿ.

8 ಲಿವ್ಯಾತಾನನನ್ನು* ಎಬ್ಬಿಸಬಲ್ಲ ಶಪಿಸುವ ಮಾಂತ್ರಿಕರು ನಾನು ಹುಟ್ಟಿದ ರಾತ್ರಿಯನ್ನು ಶಪಿಸಲಿ.

9 ಆ ದಿನದ ಮುಂಜಾನೆಯ ನಕ್ಷತ್ರಗಳು ಕತ್ತಲಾಗಲಿ. ಅದು ಮುಂಜಾನೆಯ ಬೆಳಕಿಗಾಗಿ ಎದುರು ನೋಡಿದರೂ ಹೊಂದದಿರಲಿ. ಅದು ಸೂರ್ಯೋದಯದ ಕಿರಣಗಳನ್ನು ನೋಡದಿರಲಿ.

10 ಯಾಕಂದರೆ ಆ ರಾತ್ರಿಯು ನನ್ನ ತಾಯಿಯ ಗರ್ಭದ್ವಾರವನ್ನು ಮುಚ್ಚಿ ನನ್ನ ಕಣ್ಣುಗಳಿಗೆ ಶ್ರಮೆಯನ್ನು ಮರೆಮಾಡಲಿಲ್ಲ.

11 "ನಾನು ಹುಟ್ಟಿದಾಗಲೇ ಯಾಕೆ ಸಾಯಲಿಲ್ಲ? ತಾಯಿಯ ಗರ್ಭದಿಂದ ಬರುತ್ತಿರುವಾಗಲೇ ನಾನೇಕೆ ಸಾಯಲಿಲ್ಲ?

12 ತಾಯಿಯು ತನ್ನ ಮಡಲಲ್ಲಿ ನನ್ನನ್ನು ಹೊತ್ತುಕೊಂಡದ್ದೇಕೆ? ಆಕೆಯ ಸ್ತನಗಳು ನನಗೆ ಹಾಲು ಕುಡಿಯಗೊಟ್ಟದ್ದೇಕೆ?

13-14 ನಾನು ಹುಟ್ಟಿದಾಗಲೇ ಸತ್ತುಹೋಗಿದ್ದರೆ, ಸಮಾಧಾನದಿಂದ ನಿದ್ರೆಮಾಡುತ್ತಿದ್ದೆನು. ಭೂರಾಜರೊಂದಿಗೂ ಮಂತ್ರಿಗಳೊಂದಿಗೂ ವಿಶ್ರಮಿಸಿಕೊಳ್ಳುತ್ತಿದ್ದೆನು. ಅವರು ತಮಗಾಗಿ ಕಟ್ಟಿಸಿಕೊಂಡ ಪಟ್ಟಣಗಳು ಈಗ ಹಾಳುಬಿದ್ದಿವೆ.

15 ಬಂಗಾರವನ್ನು ಕೂಡಿಸಿಟ್ಟು ತಮ್ಮ ಮನೆಗಳನ್ನು ಬೆಳ್ಳಿಯಿಂದ ತುಂಬಿಸಿಕೊಂಡ ಅಧಿಪತಿಗಳೊಡನೆ ನಾನು ವಿಶ್ರಮಿಸಿಕೊಳ್ಳುತ್ತಿದ್ದೆನು.

16 ನಾನು ಮಗುವಾಗಿ ಹುಟ್ಟುವಾಗಲೇ ಸತ್ತು ನೆಲದಲ್ಲಿ ಸಮಾಧಿಯಾಗಲಿಲ್ಲವೇಕೆ? ಹಗಲಿನ ಬೆಳಕನ್ನು ಎಂದೂ ಕಂಡಿಲ್ಲದ ಮಗುವಿನಂತೆ ನಾನಿರಬೇಕಿತ್ತು.

17 ದುಷ್ಟರು ಸಮಾಧಿಯಲ್ಲಿರುವಾಗ ಕೇಡುಮಾಡುವುದನ್ನು ನಿಲ್ಲಿಸುವರು. ಆಯಾಸಗೊಂಡಿರುವ ಜನರು ಸಮಾಧಿಯಲ್ಲಿ ವಿಶ್ರಾಂತಿಯನ್ನು ಕಂಡುಕೊಳ್ಳುವರು.

18 ಸೆರೆಯಾಳುಗಳು ಸಹ ಸಮಾಧಿಯಲ್ಲಿ ಸುಖವಾಗಿರುವರು; ಅವರ ಒಡೆಯನ ಧ್ವನಿಯು ಅವರಿಗೆ ಕೇಳಿಸುವುದಿಲ್ಲ.

19 ಸಮಾಧಿಯಲ್ಲಿ ದೊಡ್ಡವರು ಚಿಕ್ಕವರು ಎಂಬ ಭೇದವಿಲ್ಲ; ಆಳು, ಒಡೆಯ ಎಂಬ ಕಟ್ಟಳೆಯಿಲ್ಲ.

20 "ಬಹು ವ್ಯಥೆಯಿಂದ ಸಂಕಟಪಡುತ್ತಿರುವವನು ಯಾಕೆ ಜೀವಿಸಬೇಕು? ಮನನೊಂದಿರುವವನಿಗೆ ಜೀವವನ್ನು ಕೊಡುವುದೇಕೆ?

---

**ಲಿವ್ಯಾತಾನ** ಕೆಲವರು ಇದನ್ನು ಮೊಸಳೆ ಎಂದು ಭಾವಿಸುತ್ತಾರೆ. ಇನ್ನು ಕೆಲವರು ಇದನ್ನು ಮಹಾಸಮುದ್ರಪ್ರಾಣಿ ಎಂದು ಭಾವಿಸುತ್ತಾರೆ. ಇದರ ಮೂಲಕವಾಗಿ ಮಾಂತ್ರಿಕರು ಸೂರ್ಯಗ್ರಹಣವನ್ನು ಉಂಟುಮಾಡಬಲ್ಲರೆಂದು ಜನರು ಭಾವಿಸಿಕೊಂಡಿದ್ದರು.

21 ಅವನು ಸಾಯಲು ಬಯಸಿದರೂ ಸಾವು ಬರು
ವುದಿಲ್ಲ. ಹೂಳಿಟ್ಟಿರುವ ಭಂಡಾರವನ್ನು ಹುಡು
ಕುವುದಕ್ಕಿಂತಲೂ ಹೆಚ್ಚಾಗಿ ವ್ಯಥೆಯುಳ್ಳವನು
ಸಾವನ್ನೇ ಹುಡುಕುವನು.
22 ಅವರು ಸಮಾಧಿಗೆ ಸೇರುವಾಗ ಬಹು ಸಂತೋಷ
ಪಡುವರು; ಆನಂದದಿಂದ ಕೂಗುವರು.
23 ದೇವರು ಯಾರ ಭವಿಷ್ಯವನ್ನು ರಹಸ್ಯವಾಗಿಡು
ತ್ತಾನೊ, ಯಾರ ಸುತ್ತಲೂ ಗೋಡೆಯನ್ನು ಕಟ್ಟು
ತ್ತಾನೊ ಅವರಿಗೆ ಯಾಕೆ ಜೀವವನ್ನು ಕೊಡುತ್ತಾನೆ.
24 ಊಟದ ಸಮಯದಲ್ಲಿ ನಿಟ್ಟುಸಿರೇ ನನ್ನ ಆಹಾರ
ವಾಗಿದೆ. ನನ್ನ ನರಳಾಟವು ಜಲಧಾರೆಯಂತಿದೆ.
25 ಆಪತ್ತು ಸಂಭವಿಸಬಹುದೆಂದು ನಾನು ಭಯ
ಗೊಂಡಿದ್ದೆನು. ನಾನು ಯಾವುದಕ್ಕೆ ಹೆದರಿ
ಕೊಂಡಿದ್ದೆನೊ ಅದು ನನಗೆ ಸಂಭವಿಸಿದೆ!
26 ನನಗೆ ಸಮಾಧಾನವಿಲ್ಲ; ವಿಶ್ರಾಂತಿಯೂ ಇಲ್ಲ.
ನನಗೆ ಉಪಶಮನವಿಲ್ಲ; ನನಗಿರುವುದು ಕೇವಲ
ಕಷ್ಟವೊಂದೇ!''

### ಎಲೀಫಜನ ವಾದ

4 ಆಗ ಎಲೀಫಜನು ಹೀಗೆ ಉತ್ತರಿಸಿದನು:
1-2 ''ಒಬ್ಬನು ನಿನ್ನೊಂದಿಗೆ ಮಾತಾಡತೊಡಗಿದರೆ
ನಿನಗೆ ಬೇಸರವಾಗುವುದೇ? ಸುಮ್ಮನಿರಲು ನನ
ಗಂತೂ ಸಾಧ್ಯವಿಲ್ಲ.
3 ''ಯೋಬನೇ, ನೀನು ಅನೇಕರಿಗೆ ಉಪದೇಶಿಸಿ
ರುವೆ. ನೀನು ಬಲಹೀನ ಕೈಗಳಿಗೆ ಶಕ್ತಿಯನ್ನು
ಕೊಟ್ಟಿರುವೆ;
4 ಎಡವಿಬಿದ್ದವರನ್ನು ನಿನ್ನ ಮಾತುಗಳಿಂದ ಉದ್ಧರಿ
ಸಿರುವೆ; ಬಲಹೀನವಾದ ಮೊಣಕಾಲುಗಳನ್ನು
ಪ್ರೋತ್ಸಾಹದಿಂದ ಬಲಗೊಳಿಸಿರುವೆ.
5 ಈಗಲಾದರೋ ನಿನಗೆ ಕೇಡು ಬಂದಿದೆ; ಆದ್ದರಿಂದ
ನೀನು ನಿರಾಶನಾಗಿರುವೆ. ಕೇಡು ನಿನಗೆ ಬಡಿದಿರು
ವುದರಿಂದ ಭ್ರಮೆಗೊಂಡಿರುವೆ.
6 ನೀನು ದೇವರಲ್ಲಿ ಭಯಭಕ್ತಿಯಿಂದಿರುವುದರಿಂದ
ಆತನಲ್ಲಿ ಭರವಸವಿಡು. ನೀನು ನೀತಿವಂತನಾಗಿರು
ವುದರಿಂದ ಅದೇ ನಿನ್ನ ನಿರೀಕ್ಷೆಯಾಗಿರಲಿ.
7 ''ಯೋಬನೇ, ಆಲೋಚಿಸು: ಎಂದಾದರೂ ನಿರಪ
ರಾಧಿಯು ನಾಶವಾಗಿರುವನೇ? ಎಂದಾದರೂ
ನೀತಿವಂತರು ನಾಶವಾಗಿರುವರೇ?
8 ಅಧರ್ಮವನ್ನು ಮತ್ತು ಕೇಡನ್ನು ಬಿತ್ತುವವರು
ಅದನ್ನೇ ಕೊಯ್ಯುವರು.
9 ದೇವರ ಉಸಿರು ಅವರನ್ನು ಕೊಲ್ಲುತ್ತದೆ; ಆತನ
ಕೋಪದ ಗಾಳಿಯು ಅವರನ್ನು ನಾಶಮಾಡುತ್ತದೆ.
10 ದುಷ್ಟರು ಸಿಂಹಗಳಂತೆ ಗರ್ಜಿಸುತ್ತಾ ಗುರುಗುಟ್ಟು
ವರು. ಆದರೆ ದೇವರು ದುಷ್ಟರನ್ನು ಸುಮ್ಮನಿರಿಸಿ,
ಅವರ ಹಲ್ಲುಗಳನ್ನು ಮುರಿದುಹಾಕುವನು.
11 ದುಷ್ಟರು ಆಹಾರವಿಲ್ಲದ ಸಿಂಹಗಳಂತಿದ್ದು ಸಾಯು
ವರು; ಅವರ ಮಕ್ಕಳು ಚದರಿಹೋಗಿ ಅಳಿದು
ಹೋಗುವರು.
12 ''ಒಂದು ಸಂದೇಶವು ನನಗೆ ರಹಸ್ಯವಾಗಿ ತಿಳಿಸ
ಲ್ಪಟ್ಟಿತು; ನನ್ನ ಕಿವಿಗಳಿಗೆ ಅದು ಗುಸುಗುಸು
ಸದ್ದಾಗಿ ಕೇಳಿಬಂತು.
13 ಮನುಷ್ಯರಿಗೆ ಗಾಢ ನಿದ್ರೆ ಹತ್ತುವ ಸಮಯದಲ್ಲಿ
ರಾತ್ರಿಯ ಕನಸುಗಳಿಂದ ಯೋಚನೆಯಲ್ಲಿರುವಾಗ
14 ನನ್ನ ಎಲುಬುಗಳೆಲ್ಲಾ ನಡುಗುವಷ್ಟು ಭಯ
ಗೊಂಡೆನು.
15 ಯಾವುದೋ ಒಂದು ಉಸಿರು ನನ್ನ ಮುಖಕ್ಕೆ ಸುಳಿ
ಯಲು ಮೈಯೆಲ್ಲಾ ರೋಮಾಂಚನಗೊಂಡಿತು.
16 ಯಾವುದೋ ಒಂದು ಆತ್ಮ ನನ್ನ ಕಣ್ಣೆದುರಿನಲ್ಲಿ
ಬಂದು ನಿಂತುಕೊಂಡಿತು; ಅದು ಏನೆಂಬುದು
ನನಗೆ ಗೊತ್ತಾಗಲಿಲ್ಲ. ಸೂಕ್ಷ್ಮಧ್ವನಿಯೊಂದು
ನನಗೆ ಕೇಳಿಬಂತು.
17 ಅದೇನಂದರೆ: 'ದೇವರಿಗಿಂತಲೂ ನೀತಿವಂತನಾದ
ಮನುಷ್ಯನಿರುವನೇ? ಮನುಷ್ಯನು ತನ್ನ ಸೃಷ್ಟಿ
ಕರ್ತನಿಗಿಂತಲೂ ಶುದ್ಧನಾಗಿರುವನೇ?
18 ದೇವರು ತನ್ನ ಪರಲೋಕದ ಸೇವಕರುಗಳಲ್ಲಿಯೂ
ಭರವಸವಿಡುವುದಿಲ್ಲ. ದೇವರು ತನ್ನ ದೂತರು
ಗಳಲ್ಲಿಯೂ ತಪ್ಪನ್ನು ಕಂಡುಹಿಡಿಯುವನು.
19 ಹೀಗಿರಲು ದೇವರು ಮನುಷ್ಯರಲ್ಲಿ ಎಷ್ಟೋ ತಪ್ಪು
ಗಳನ್ನು ಕಂಡುಹಿಡಿಯುವನು; ಮನುಷ್ಯರು
ಮಣ್ಣಿನ ಮನೆಗಳಲ್ಲಿ* ವಾಸಿಸುತ್ತಾರೆ. ಈ ಮಣ್ಣಿನ
ಮನೆಗಳ ಅಸ್ತಿವಾರಗಳು ಧೂಳಿನಲ್ಲಿವೆ. ಅವರು
ಹುಳಕ್ಕಿಂತಲೂ ಸುಲಭವಾಗಿ ಸಾವಿಗೀಡಾಗುವರು!
20 ಸೂರ್ಯೋದಯ ಮತ್ತು ಸೂರ್ಯಾಸ್ತಮಾನಗಳ
ನಡುವೆ ಅವರು ನಜ್ಜುಗುಜ್ಜಾಗುವರು. ಅವರು ಸತ್ತು
ನಿತ್ಯ ನಾಶವಾಗುವುದನ್ನು ಯಾರೂ
ಗಮನಿಸುವುದಿಲ್ಲ.
21 ಅವರ ಗುಡಾರಗಳ ಹಗ್ಗಗಳು ಬಿಚ್ಚಲ್ಪಡುವವು,
ಅವರು ಜ್ಞಾನವಿಲ್ಲದವರಾಗಿ ಸತ್ತುಹೋಗುವರು.'
5 ''ಯೋಬನೇ, ನೀನು ಕೂಗಿಕೊಂಡರೂ ನಿನಗೆ
ಉತ್ತರಿಸುವವರಿಲ; ದೇವದೂತರುಗಳಲ್ಲಿ
ಯಾರನ್ನು ಆಶ್ರಯಿಸಿಕೊಳ್ಳುವೆ ?
2 ಮೂಢನ ಕೋಪವು ಅವನನ್ನೇ ಕೊಲ್ಲುವುದು.
ಮೂರ್ಖನ ಹೊಟ್ಟೇಕಿಚ್ಚು ಅವನನ್ನೇ
ಕೊಲ್ಲುವುದು.

---

**ಮಣ್ಣಿನ ಮನೆ** ಇದರರ್ಥ, ಮಾನವ ದೇಹ.

3 ಅಭಿವೃದ್ಧಿಯಾಗುತ್ತಿರುವ ಮೂರ್ಖನನ್ನು ನಾನು
ನೋಡಿದ್ದೇನೆ. ಇದ್ದಕ್ಕಿದ್ದಂತೆ ಅವನ ಮನೆಯು
ಶಾಪಗ್ರಸ್ತವಾಯಿತು.
4 ಅವನ ಮಕ್ಕಳಿಗೆ ಸಹಾಯಮಾಡುವಂಥವರು
ಇರಲಿಲ್ಲ. ಅವರ ಪರವಾಗಿ ವಾದಿಸಲು ನ್ಯಾಯಾಲ
ಯದಲ್ಲಿ ಒಬ್ಬರೂ ಇರಲಿಲ್ಲ.
5 ಹಸಿದಿರುವವರು ಆ ಮೂರ್ಖನ ಬೆಳೆಗಳನ್ನು ತಿಂದು
ಬಿಟ್ಟರು. ಅವರು ಬೇಲಿಗಳ ಮಧ್ಯದಲ್ಲಿ ಬೆಳೆಯು
ತ್ತಿರುವ ದಾನ್ಯವನ್ನು ಸಹ ತಿಂದುಬಿಟ್ಟರು. ದುರಾಶೆ
ಯುಳ್ಳವರು ಅವರ ಆಸ್ತಿಯನ್ನೆಲ್ಲಾ ಕಸಿದು
ಕೊಂಡರು.
6 ವಿಪತ್ಕಾಲಗಳು ಬರುವುದು ಧೂಳಿನಿಂದಲ್ಲ; ಕೇಡು
ಬೆಳೆಯುವುದು ನೆಲದಿಂದಲ್ಲ.
7 ಆದರೆ ಮನುಷ್ಯರಿಂದ ಕೇಡುಗಳು ಉದ್ಭವಿಸು
ವುದೂ ಬೆಂಕಿಯಿಂದ ಕಿಡಿಗಳು ಮೇಲಕ್ಕೆ
ಹಾರುವುದೂ ಸಹಜ.
8 ''ಯೋಬನೇ, ನಾನೇನಾದರೂ ನಿನ್ನ ಸ್ಥಿತಿಯಲ್ಲಿ
ದ್ದಿದ್ದರೆ, ದೇವರನ್ನೇ ಆಶ್ರಯಿಸಿಕೊಂಡು ನನ್ನ
ಕಷ್ಟವನ್ನು ಹೇಳಿಕೊಳ್ಳುತ್ತಿದ್ದೆನು.
9 ದೇವರ ಅದ್ಭುತಕಾರ್ಯಗಳು ಗ್ರಹಿಸಲಶಕ್ಯ. ಆತನ
ಮಹತ್ಕಾರ್ಯಗಳು ಅಸಂಖ್ಯಾತ .
10 ದೇವರು ಭೂಮಿಯ ಮೇಲೆ ಮಳೆ ಸುರಿಸಿ ಹೊಲ
ಗದ್ದೆಗಳಿಗೆ ನೀರನ್ನು ಒದಗಿಸುವನು.
11 ದೇವರು ಹೀನಸ್ಥಿತಿಯಲ್ಲಿರುವವರನ್ನು ಉನ್ನತ
ಸ್ಥಿತಿಗೆ ಏರಿಸುವನು. ವ್ಯಥೆಯಿಂದಿರುವವರನ್ನು
ಸಂತೋಷಗೊಳಿಸುವನು.
12 ದೇವರು ಯುಕ್ತಿವಂತರ ಕುತಂತ್ರಗಳನ್ನು ವಿಫಲ
ಗೊಳಿಸಿ ಭಂಗಪಡಿಸುವನು.
13 ದೇವರು ಜ್ಞಾನಿಗಳನ್ನು ಅವರ ತಂತ್ರಗಳಲ್ಲೇ
ಹಿಡಿದುಕೊಳ್ಳುವನು; ಮೋಸಗಾರರ ಆಲೋಚನೆ
ಗಳನ್ನು ವಿಫಲಗೊಳಿಸುವನು.
14 ಯುಕ್ತಿವಂತರು ಹಗಲಿನಲ್ಲೂ ಕತ್ತಲೆಗೆ ಓಡಿ
ಹೋಗುವರು; ನಡುಮಧ್ಯಾಹ್ನದಲ್ಲಿ ಕತ್ತಲೆ
ಯಲ್ಲೋ ಎಂಬಂತೆ ಮುಗ್ಗರಿಸುವರು.
15 ದೇವರು ಬಡವರನ್ನು ದುಷ್ಟರ ನಿಂದನೆಯಿಂದಲೂ
ಬಲಿಷ್ಠರ ಕೈಯಿಂದಲೂ ಕಾಪಾಡುವನು.
16 ಹೀಗೆ ಬಡವನಿಗೆ ನಿರೀಕ್ಷೆ ಉಂಟಾಗುವುದು.
ಅನ್ಯಾಯವು ತನ್ನ ಬಾಯನ್ನು ಮುಚ್ಚಿಕೊಳ್ಳುವುದು.
17 ''ದೇವರು ಯಾವನನ್ನು ಶಿಕ್ಷಿಸುವನೋ ಅವನೇ
ಭಾಗ್ಯವಂತನು. ಆದ್ದರಿಂದ ಸರ್ವಶಕ್ತನಾದ
ದೇವರು ನಿನ್ನನ್ನು ಶಿಕ್ಷಿಸುವಾಗ ದೂರು ಹೇಳ
ಬೇಡ.''
18 ಗಾಯಮಾಡುವವನೂ ಗಾಯಕಟ್ಟುವವನೂ
ಆತನೇ. ಆತನು ಗಾಯಮಾಡಿದರೂ ಆತನ ಕೈಗಳೇ
ವಾಸಿಮಾಡುತ್ತವೆ.
19 ಆತನು ನಿನ್ನನ್ನು ಆರು ಆಪತ್ತುಗಳಿಂದ ರಕ್ಷಿಸುವನು;
ಹೌದು, ಏಳು ಆಪತ್ತುಗಳಿಂದಲೂ ನಿನಗೆ
ಕೇಡಾಗದು.
20 ಬರಗಾಲದಲ್ಲಿ ಮರಣದಿಂದಲೂ ಯುದ್ಧದಲ್ಲಿ ಕತ್ತಿ
ಯಿಂದಲೂ ಆತನು ನಿನ್ನನ್ನು ಸಂರಕ್ಷಿಸುವನು.
21 ದೇವರು ನಿನ್ನನ್ನು ನಿಂದನೆಯಿಂದ ತಪ್ಪಿಸುವನು.
ನಾಶನದಲ್ಲಿಯೂ ನೀನು ಭಯಪಡುವ
ಅಗತ್ಯವಿಲ್ಲ!
22 ನಾಶನಕ್ಕೂ ಬರಗಾಲಕ್ಕೂ ನೀನು ನಗುವೆ. ನೀನು
ಕ್ರೂರಪ್ರಾಣಿಗಳಿಗೆ ಭಯಪಡುವ ಆಗತ್ಯವಿಲ್ಲ!
23 ನೀನು ಹೊಲದ ಕಲ್ಲುಗಳೊಂದಿಗೂ ಒಪ್ಪಂದ
ಮಾಡಿಕೊಂಡಿರುವೆ; ಕಾಡು ಮೃಗಗಳೂ
ನಿನ್ನೊಂದಿಗೆ ಸಮಾಧಾನದಿಂದಿರುತ್ತವೆ.
24 ನಿನ್ನ ಗುಡಾರವು ಸುರಕ್ಷಿತವಾಗಿರುವುದರಿಂದ
ನೀನು ಸಮಾಧಾನದಿಂದ ಜೀವಿಸುವೆ. ನೀನು ನಿನ್ನ
ಆಸ್ತಿಯನ್ನು ಲೆಕ್ಕಿಸುವಾಗ ಯಾವುದೂ ಕಳೆದು
ಹೋಗಿರುವುದಿಲ್ಲ.
25 ನೀನು ಅನೇಕ ಮಕ್ಕಳನ್ನು ಪಡೆದುಕೊಳ್ಳುವೆ.
ಅವರು ಭೂಮಿಯ ಮೇಲಿರುವ ಹುಲ್ಲಿನ
ಗರಿಗಳಷ್ಟಿರುವರು.
26 ಸುಗ್ಗಿಕಾಲದವರೆಗೂ ಬೆಳೆದು ಬಲಿಯುವ ಗೋಧಿ
ಯಂತೆ ನೀನಿರುವೆ. ಹೌದು, ನೀನು ವೃದ್ಧಾಪ್ಯದ
ಕೊನೆಯವರೆಗೂ ಜೀವಿಸುವೆ.
27 ''ಯೋಬನೇ,ನಾವು ಈ ಸಂಗತಿಗಳನ್ನು ವಿಚಾರಿ
ಸಿದ್ದೇವೆ; ಅವು ಸತ್ಯವೆಂದು ನಮಗೆ ತಿಳಿದಿದೆ.
ಆದ್ದರಿಂದ ನೀನು ಸಹ ಕಿವಿಗೊಟ್ಟು ಅವುಗಳನ್ನು
ತಿಳಿದುಕೋ.''

## ಯೋಬನ ವಾದ

6 1-2 ಆಗ ಯೋಬನು ಹೀಗೆ ಉತ್ತರಿಸಿದನು:
''ನನ್ನ ಸಂಕಟವನ್ನು ತೂಕಮಾಡುವುದಾದರೆ,
ನನ್ನ ಕಷ್ಟವನ್ನೆಲ್ಲಾ ತಕ್ಕಡಿಯ ಮೇಲಿಡುವು
ದಾದರೆ,
3 ನನ್ನ ದುಃಖವನ್ನು ನೀನು ಅರ್ಥಮಾಡಿಕೊಳ್ಳುವೆ!
ನನ್ನ ದುಃಖವು ಸಮುದ್ರದ ಮರಳಿಗಿಂತಲೂ ಭಾರ
ವಾಗಿದೆ. ಆದ್ದರಿಂದಲೇ ನನ್ನ ಮಾತುಗಳು
ಮೂರ್ಖತನದಂತೆ ಕಾಣುತ್ತಿವೆ.
4 ಸರ್ವಶಕ್ತನಾದ ದೇವರ ಬಾಣಗಳು ನನಗೆ ನಾಟಿ
ಕೊಂಡಿವೆ. ನನ್ನ ಪ್ರಾಣವು ಅವುಗಳ ವಿಷವನ್ನು

ಕುಡಿಯುತ್ತಿದೆ. ದೇವರು ಕಳುಹಿಸಿದ ಅಪಾಯ
ಗಳು ನನಗೆ ವಿರೋಧವಾಗಿ ವ್ಯೂಹ ಕಟ್ಟಿವೆ.
5 ಕಾಡುಕತ್ತೆಗೆ ತಿನ್ನಲು ಹುಲ್ಲಿದ್ದರೆ ಅರಚುವುದೇ?
ಎತ್ತಿಗೆ ಆಹಾರವಿದ್ದರೆ ಕೂಗುವುದೇ?
6 ಊಟವನ್ನು ಉಪ್ಪಿಲ್ಲದೆ ತಿನ್ನುವರೇ? ಮೊಟ್ಟೆಯ
ಲೋಳೆಗೆ ರುಚಿಯಿದೆಯೇ?
7 ಇಂಥಾ ಊಟವು ನನಗೆ ಅಸಹ್ಯ; ನಾನು ಅದನ್ನು
ಮುಟ್ಟಲಾರೆ.
8 ‘‘ಅಯ್ಯೋ! ನಾನು ಕೇಳಿಕೊಂಡದ್ದು ನನಗೆ ದೊರೆ
ಯುವುದಿಲ್ಲವೇ? ನಾನು ಬಯಸಿದ್ದನ್ನು ದೇವರು
ನನಗೆ ಕೊಡುವುದಿಲ್ಲವೇ?
9 ನನ್ನನ್ನು ಜಜ್ಜಿಹಾಕಲು ದೇವರು ಇಚ್ಛೆಸುವುದಾಗಿ
ದ್ದರೆ, ಆತನು ನನ್ನನ್ನು ಕೊಲ್ಲಲಿ!
10 ಆಗ ನನಗೆ ಆದರಣೆಯಾಗುವುದು. ಮಿತಿಯಿಲ್ಲದ
ಯಾತನೆಯಲ್ಲಿಯೂ ಉಲ್ಲಾಸಿಸುವೆನು; ಪವಿತ್ರ
ವಾಗಿರುವಾತನ ಆಜ್ಞೆಗಳಿಗೆ ನಾನು ಅವಿಧೇಯ
ನಾಗಲೇ ಇಲ್ಲ.’’
11 ‘‘ನನ್ನ ಬಲವು ಕುಗ್ಗಿ ಹೋಗಿದೆ; ಬದುಕುವ
ನಿರೀಕ್ಷೆಯೇ ನನಗಿಲ್ಲ. ಕೊನೆಯಲ್ಲಿ ನನಗೇ
ನಾಗುವುದೊ ತಿಳಿಯದು, ಆದ್ದರಿಂದ ನಾನು
ತಾಳ್ಮೆಯಿಂದಿರುವುದೇಕೇ?
12 ನಾನು ಬಂಡೆಯಂತೆ ಬಲಿಷ್ಠನಲ್ಲ. ನನ್ನ ದೇಹವು
ತಾಮ್ರದಿಂದ ಮಾಡಿದ್ದಲ್ಲ.
13 ಈಗ ನನಗೇ ಸಹಾಯಮಾಡಿಕೊಳ್ಳಲು ನನ್ನಲ್ಲಿ ಶಕ್ತಿ
ಯಿಲ್ಲ. ಸಹಾಯಮಾಡುವವರೂ ನನಗೆ ಯಾರೂ
ಇಲ್ಲ.
14 ‘‘ಕಷ್ಟದಲ್ಲಿರುವವನಿಗೆ ಅವನ ಸ್ನೇಹಿತನು ದಯೆ
ತೋರಬೇಕು; ಒಂದು ವೇಳೆ ಅವನು ಸರ್ವಶಕ್ತ
ನಾದ ದೇವರಿಗೆ ವಿಮುಖನಾಗಿದ್ದರೂ ಅವನ
ಸ್ನೇಹಿತನು ನಂಬಿಗಸ್ತನಾಗಿರಬೇಕು.
15 ಆದರೆ ನನ್ನ ಸಹೋದರರಾದ ನೀವು ನಂಬಿಗಸ್ತ
ರಲ್ಲ. ನಾನು ನಿಮ್ಮನ್ನು ಆಶ್ರಯಿಸಿಕೊಳ್ಳಲಾರೆ.
ಕೆಲವೊಮ್ಮೆ ಹರಿಯುವ ಕೆಲವೊಮ್ಮೆ ಹರಿಯ
ದಿರುವ ತೊರೆಗಳಂತೆ ನೀವು ದ್ರೋಹಿಗಳಾಗಿದ್ದೀರಿ.
16 ಮಂಜಿನಿಂದಲೂ ಕರಗುವ ಹಿಮದಿಂದಲೂ ತುಂಬಿ
ಹರಿಯುವ ತೊರೆಗಳಂತೆ ನೀವಿದ್ದೀರಿ.
17 ಆದರೆ ಆ ತೊರೆಗಳು ಬೇಸಿಗೆಕಾಲದಲ್ಲಿ ಇದ್ದಕ್ಕಿ
ದ್ದಂತೆ ಹರಿಯದೆ ನಿಂತುಹೋಗುತ್ತವೆ. ಬೇಸಿಗೆ
ಕಾಲದ ಕಾವಿಗೆ ನೀರು ಬತ್ತಿಹೋಗುತ್ತದೆ;
ತೊರೆಗಳು ಇಲ್ಲವಾಗುತ್ತವೆ.
18 ವರ್ತಕರ ತಂಡಗಳು ಅವುಗಳ ದಾರಿಗಳಿಂದ ಬೇರೆ
ಕಡೆಗೆ ತಿರುಗಿಕೊಳ್ಳುವರು. ಅವರು ಅಲೆಯುತ್ತಾ
ಮರುಭೂಮಿಗೆ ಹೋಗಿ ಸಾಯುವರು.
19 ತೇಮದ ವರ್ತಕರ ತಂಡಗಳು ನೀರಿಗಾಗಿ ನೋಡು
ವರು. ಶೆಬದ ಪ್ರಯಾಣಿಕರು ನಿರೀಕ್ಷೆಯಿಂದ
ನೋಡುವರು.
20 ನೀರು ಸಿಗುವುದೆಂದು ಅವರು ನಂಬಿಕೊಂಡಿದ್ದರೂ
ಅವರಿಗೆ ನಿರಾಶೆಯಾಯಿತು.
21 ನೀವು ಸಹ ಆ ತೊರೆಗಳಂತಿದ್ದೀರಿ. ನೀವು ನನ್ನ
ಕಷ್ಟಗಳನ್ನು ನೋಡಿ ಭಯಗೊಂಡಿದ್ದೀರಿ.
22 ನನಗೆ ಏನಾದರೂ ಕೊಡಿ ಎಂದಾಗಲೀ ‘ನನ
ಗೋಸ್ಕರವಾಗಿ ನಿಮ್ಮ ಐಶ್ವರ್ಯದಿಂದ ಇಂಥವನಿಗೆ
ಲಂಚ ಕೊಡಿ’ ಎಂದಾಗಲೀ ನಾನೆಂದೂ ಕೇಳಲಿಲ್ಲ.
23 ‘ಶತ್ರುವಿನ ಶಕ್ತಿಯಿಂದ ನನ್ನನ್ನು ರಕ್ಷಿಸಿರಿ. ವೈರಿ
ಯಿಂದ ನನ್ನನ್ನು ರಕ್ಷಿಸಲು ಪ್ರಾಯಶ್ಚಿತ್ತ ಕೊಡಿರಿ’
ಎಂದಾಗಲೀ ನಾನೆಂದೂ ಕೇಳಲಿಲ್ಲ.
24 ‘‘ಈಗ ನನಗೆ ಉಪದೇಶಿಸಿ ನನ್ನ ತಪ್ಪನ್ನು ತಿಳಿಸಿರಿ;
ನಾನು ಮೌನವಾಗಿರುವೆನು.
25 ಯಥಾರ್ಥವಾದ ನುಡಿಗಳು ಶಕ್ತಿಯುತವಾಗಿವೆ.
ಆದರೆ ನಿಮ್ಮ ವಾದಗಳು ಏನನ್ನೂ ನಿರೂಪಿಸುವು
ದಿಲ್ಲ.
26 ನನ್ನನ್ನು ಟೀಕೆ ಮಾಡಬೇಕೆಂದಿದ್ದೀರೋ? ಇನ್ನೂ
ಕಟುವಾದ ಮಾತುಗಳನ್ನು ಆಡಬೇಕೆಂದಿ
ದ್ದೀರೋ?
27 ಹೌದು, ನೀವು ಚೀಟುಹಾಕಿ ಅನಾಥರಿಗೆ ಸೇರಿದ
ವಸ್ತುಗಳನ್ನು ತೆಗೆದುಕೊಳ್ಳುವವರಾಗಿದ್ದೀರಿ. ನೀವು
ನಿಮ್ಮ ಸ್ನೇಹಿತನನ್ನು ವ್ಯಾಪಾರ ಮಾಡುವವ
ರಾಗಿದ್ದೀರಿ.
28 ‘‘ಆದರೆ ಈಗ ದಯವಿಟ್ಟು ನನ್ನ ಮುಖವನ್ನು
ನೋಡಿರಿ. ನಾನು ನಿಮಗೆ ಸುಳ್ಳು ಹೇಳುವುದಿಲ್ಲ.
29 ಆದ್ದರಿಂದ ಈಗ ನಿಮ್ಮ ಮನಸ್ಸನ್ನು ಬದ
ಲಾಯಿಸಿರಿ. ಅನ್ಯಾಯಸ್ಥರಾಗಿರಬೇಡಿ. ಹೌದು,
ಮತ್ತೊಮ್ಮೆ ಯೋಚಿಸಿರಿ. ನಾನೇನೂ ತಪ್ಪು
ಮಾಡಿಲ್ಲ.
30 ನಾನು ಸುಳ್ಳು ಹೇಳುತ್ತಿಲ್ಲ. ಯಾವುದು ಒಳ್ಳೆಯದು
ಯಾವುದು ಕೆಟ್ಟದ್ದು ಎಂದು ನನಗೆ ಗೊತ್ತಿದೆ.’’

7 ‘‘ಭೂಲೋಕದಲ್ಲಿ ಮನುಷ್ಯನಿಗೆ ಬಹು
ಪ್ರಯಾಸದ ಕೆಲಸವಿದೆ. ಅವನ ಜೀವನವು ಕೂಲಿ
ಕೆಲಸದವನ ಜೀವನದಂತಿದೆ.
2 ಮನುಷ್ಯನು ಉರಿಬಿಸಿಲಿನಲ್ಲಿ ಪ್ರಯಾಸಪಟ್ಟು
ದುಡಿದ ಮೇಲೆ ತಂಪಾದ ನೆರಳನ್ನು ಬಯಸುವ
ಗುಲಾಮನಂತಿದ್ದಾನೆ. ಮನುಷ್ಯನು, ದಿನದ ಕೂಲಿ
ಗಾಗಿ ಕಾಯುತ್ತಿರುವ ಕೂಲಿಯವನಂತಿದ್ದಾನೆ.
3 ಜಿಗುಪ್ಸೆಯ ತಿಂಗಳುಗಳನ್ನೂ ಸಂಕಟದ ರಾತ್ರಿ
ಗಳನ್ನೂ ನನಗೆ ನೇಮಿಸಲಾಗಿದೆ.

4 ಮಲಗಿಕೊಳ್ಳುವಾಗ, ‘ಯಾವಾಗ ಏಳುವೆನೋ’
ಅಂದುಕೊಳ್ಳುವೆನು. ರಾತ್ರಿಯು ಬೆಳೆಯುತ್ತಾ
ಹೋಗುವುದು; ಸೂರ್ಯೋದಯದವರೆಗೂ
ಹೊರಳಾಡುವೆನು.
5 ನನ್ನ ದೇಹವು ಹುಳಗಳಿಂದಲೂ ಧೂಳಿನಿಂದಲೂ
ಆವರಿಸಿಕೊಂಡಿದೆ. ನನ್ನ ಚರ್ಮವು ಬಿರಿದುಹೋಗಿ
ಕೀವು ಸೋರುತ್ತಿರುವ ಕುರುಗಳಿಂದ ತುಂಬಿ
ಹೋಗಿದೆ.
6 ‘‘ನನ್ನ ದಿನಗಳು ಮಗ್ಗದ ಲಾಳಿಗಿಂತಲೂ ವೇಗವಾಗಿ
ಹೋಗುತ್ತವೆ. ನನ್ನ ಜೀವಿತವು ನಿರೀಕ್ಷೆಯಿಲ್ಲದೆ
ಕೊನೆಗೊಳ್ಳುವುದು.
7 ದೇವರೇ, ನನ್ನ ಜೀವನವು ಕೇವಲ ಉಸಿರೆಂಬು
ದನ್ನು ನೆನಸಿಕೋ. ನನ್ನ ಕಣ್ಣುಗಳು ಮತ್ತೆಂದಿಗೂ
ಸುಖವನ್ನು ನೋಡುವುದಿಲ್ಲ.
8 ನೀನು ನನ್ನನ್ನು ಮತ್ತೆಂದೂ ಕಾಣುವುದಿಲ್ಲ. ನೀನು
ನನಗಾಗಿ ಹುಡುಕುವೆ. ಆದರೆ ನಾನು ಅಷ್ಟರಲ್ಲೇ
ಹೊರಟುಹೋಗಿರುವೆನು.
9 ಮೋಡವು ಕಣ್ಣಿಗೆ ಕಾಣದೆ ಇಲ್ಲವಾಗುವುದು. ಅದೇ
ರೀತಿಯಲ್ಲಿ, ಸತ್ತು ಸಮಾಧಿಯಲ್ಲಿ ಹೂಳಲ್ಪಟ್ಟವನು
ಹಿಂತಿರುಗಿ ಬರುವುದಿಲ್ಲ.
10 ಅವನು ತನ್ನ ಮನೆಗೆ ಮತ್ತೆಂದಿಗೂ ಹಿಂತಿರುಗಿ
ಬರುವುದಿಲ್ಲ. ಇನ್ನುಮೇಲೆ ಅವನ ಸ್ಥಳವು ಅವನನ್ನು
ತಿಳಿದಿರುವುದಿಲ್ಲ.
11 ‘‘ಆದ್ದರಿಂದ ನಾನು ಮೌನವಾಗಿರುವುದಿಲ್ಲ!
ನಾನು ಮಾತಾಡುವೆನು! ನನ್ನ ಆತ್ಮವು ಸಂಕಟ
ಪಡುತ್ತಿದೆ! ನನ್ನ ಮನಸ್ಸು ನೊಂದು ಹೋಗಿರು
ವುದರಿಂದ ನಾನು ದೂರುಹೇಳುವೆನು.
12 ದೇವರೇ, ನೀನು ನನ್ನನ್ನು ಕಾಯುವುದೇಕೆ?
ನಾನೇನೂ ಸಮುದ್ರವೇ? ಭಯಂಕರವಾದ
ಸಮುದ್ರ ಪ್ರಾಣಿಯೇ?
13 ನನ್ನ ಹಾಸಿಗೆಯು ನನ್ನನ್ನು ಸಂತೈಸುತ್ತದೆ; ನನ್ನ
ಮಂಚವು ನನಗೆ ವಿಶ್ರಾಂತಿಯನ್ನೂ ಉಪಶಮನ
ವನ್ನೂ ಕೊಡುತ್ತದೆ ಎಂದು ನಾನು
ಆಲೋಚಿಸುವಾಗ,
14 ನೀನು ಕನಸುಗಳಿಂದ ನನ್ನನ್ನು ಹೆದರಿಸುವೆ;
ದರ್ಶನಗಳಿಂದ ನನ್ನನ್ನು ಭಯಗೊಳಿಸುವೆ.
15 ನಾನು ಬದುಕುವುದಕ್ಕಿಂತ ಉಸಿರುಕಟ್ಟಿ ಸಾಯು
ವುದೇ ಮೇಲು.
16 ನನ್ನ ಜೀವಿತವು ನನಗೆ ಅಸಹ್ಯವಾಗಿದೆ. ಶಾಶ್ವತವಾಗಿ
ಬದುಕಲು ನನಗೆ ಇಷ್ಟವಿಲ್ಲ. ನನ್ನನ್ನು ಒಬ್ಬಂಟಿಗ
ನನ್ನಾಗಿ ಬಿಟ್ಟುಬಿಡು! ನನ್ನ ಜೀವಿತಕ್ಕೆ ಅರ್ಥವೇ
ಇಲ್ಲ!
17 ದೇವರೇ, ಮನುಷ್ಯನು ಎಷ್ಟರವನು? ನೀನು ಅವ
ನನ್ನು ಸನ್ಮಾನಿಸುವುದೇಕೆ? ಅವನ ಕಡೆಗೆ ಗಮನ
ಕೊಡುವುದೇಕೆ?
18 ನೀನು ಪ್ರತಿ ಮುಂಜಾನೆ ಮನುಷ್ಯನನ್ನು ಪರೀಕ್ಷಿಸು
ವುದೇಕೆ? ಅವನನ್ನು ಪ್ರತಿಗಳಿಗೆಯಲ್ಲೂ ಪರೀಕ್ಷಿ
ಸುವುದೇಕೆ?
19 ದೇವರೇ, ಇನ್ನೆಷ್ಟರವರೆಗೆ ನೀನು ನನ್ನ ಕಡೆಯಿಂದ
ದೃಷ್ಟಿಯನ್ನು ತಿರುಗಿಸದೆ ಇರುವೆ? ನೀನು ನನ್ನನ್ನು
ಕ್ಷಣ ಕಾಲವಾದರೂ ಒಬ್ಬಂಟಿಗನನ್ನಾಗಿ
ಬಿಡುವುದಿಲ್ಲ.
20 ಮನುಷ್ಯನನ್ನು ಗಮನಿಸುವವನೇ, ನಾನು ಪಾಪ
ಮಾಡಿದ್ದರೆ, ಅದರಿಂದ ನಿನಗೇನಾಯಿತು?
ದೇವರೇ, ನಿನ್ನ ಗುರಿ ತರಬೇತಿಗಾಗಿ ನನ್ನನ್ನೇಕೆ
ಉಪಯೋಗಿಸಿದೆ? ನಾನು ನಿನಗೆ ಸಮಸ್ಯೆ
ಯಾದೆನೇ?
21 ನೀನು ನನ್ನ ತಪ್ಪುಗಳನ್ನು ಮನ್ನಿಸಬಾರದೇಕೆ? ನನ್ನ
ಪಾಪಗಳನ್ನು ಕ್ಷಮಿಸಬಾರದೇಕೆ? ನಾನು ಬೇಗನೆ
ಸತ್ತು ಸಮಾಧಿಯಲ್ಲಿರುವೆನು. ಆಮೇಲೆ ನೀನು
ನನಗಾಗಿ ಹುಡುಕುವೆ, ಆದರೆ ನಾನು ಅಷ್ಟರಲ್ಲೇ
ಹೊರಟುಹೋಗಿರುವೆನು.’’

### ಬಿಲ್ದದನ ವಾದ

8 ಬಳಿಕ ಶೂಹ್ಯ ದೇಶದ ಬಿಲ್ದದನು ಉತ್ತರಿಸಿದನು:
2 ‘‘ಇನ್ನೆಷ್ಟುಕಾಲ ಹೀಗೆ ಮಾತಾಡುವೆ? ನಿನ್ನ
ಮಾತುಗಳು ಬೀಸುವ ಬಿರುಗಾಳಿಯಂತಿವೆ.
3 ದೇವರು ಅನ್ಯಾಯ ಮಾಡುವನೇ? ಸರ್ವಶಕ್ತ
ನಾದ ದೇವರು ನೀತಿಯನ್ನು ಡೊಂಕು
ಮಾಡುವನೇ?
4 ನಿನ್ನ ಮಕ್ಕಳು ದೇವರಿಗೆ ವಿರೋಧವಾಗಿ ಪಾಪ
ಮಾಡಿದ್ದರಿಂದ ಆತನು ಅವರನ್ನು ಶಿಕ್ಷಿಸಿದ್ದಾನೆ.
ಅವರ ಪಾಪಗಳಿಗೆ ಪ್ರತಿಫಲ ದೊರೆಯಿತು.
5 ಯೋಬನೇ, ಈಗಾಲಾದರೊ ದೇವರ ಕಡೆಗೆ
ನೋಡು, ಕರುಣೆತೋರುವಂತೆ ಸರ್ವಶಕ್ತನಾದ
ದೇವರಿಗೆ ಪ್ರಾರ್ಥಿಸು.
6 ನೀನು ಶುದ್ಧನೂ ಒಳ್ಳೆಯವನೂ ಆಗಿದ್ದರೆ ಆತನು
ಬಂದು ನಿನಗೆ ಸಹಾಯ ಮಾಡುತ್ತಾನೆ; ನಿನ್ನ
ಕುಟುಂಬವನ್ನು ನಿನಗೆ ಮತ್ತೆ ದಯಪಾಲಿಸುತ್ತಾನೆ.
7 ಆಗ, ನೀನು ಮೊದಲು ಹೊಂದಿದ್ದೆಲ್ಲ ಅಲ್ಪವಾಗಿ
ತೋರುವುದು; ನಿನ್ನ ಭವಿಷ್ಯವು ಬಹು ಯಶಸ್ವಿ
ಯಾಗುವುದು.
8 ‘‘ಪೂರ್ವಿಕರನ್ನು ವಿಚಾರಿಸಿ ಅವರ ಪಿತೃಗಳು ಕಲಿತು
ಕೊಂಡದ್ದನ್ನು ತಿಳಿದುಕೋ.

9 ಯಾಕಂದರೆ, ನಾವು ಕೇವಲ ನಿನ್ನೆ ಹುಟ್ಟಿದವ
ರಂತಿದ್ದೇವೆ. ನಮಗೇನೂ ಗೊತ್ತಿಲ್ಲ. ಭೂಮಿಯ
ಮೇಲಿನ ನಮ್ಮ ದಿನಗಳು ನೆರಳಿನಂತೆ ಕ್ಷಣಿಕವಷ್ಟೇ.
10 ಅವರು ನಿನಗೆ ಉಪದೇಶಮಾಡಿ ಬುದ್ಧಿ ಹೇಳು
ವರು; ತಾವು ಕಲಿತುಕೊಂಡದ್ದನ್ನು ನಿನಗೆ ಹೇಳಿ
ಕೊಡುವರು.''
11 ''ಜಂಬುಗಿಡವು ಜವುಗುಮಣ್ಣಿಲ್ಲದೆ ಎತ್ತರವಾಗಿ
ಬೆಳೆಯಬಲ್ಲದೇ? ಜವುಗುಸಸ್ಯವು ನೀರಿಲ್ಲದೆ
ಬೆಳೆಯಬಲ್ಲದೇ?
12 ನೀರು ಬತ್ತಿಹೋದರೆ ಅವು ಸಹ ಒಣಗಿ ಹೋಗು
ತ್ತವೆ. ಅವು ತುಂಬ ಎಳೆಯದಾಗಿರುವುದರಿಂದ
ಕತ್ತರಿಸಿ ಉಪಯೋಗಿಸಲಾಗದು.
13 ದೇವರನ್ನು ಮರೆಯುವವನು ಆ ಜವುಗು ಸಸ್ಯಗ
ಳಂತೆಯೇ ಇರುವನು. ದೇವರನ್ನು ಮರೆಯುವ
ವನಿಗೆ ನಿರೀಕ್ಷೆಯೇ ಇಲ್ಲ.
14 ಅವನ ಭರವಸೆಯು ಬಹು ಬಲಹೀನವಾಗಿರು
ವುದು. ಅವನು ಜೇಡರಬಲೆಯ ಮೇಲೆ ಭರವಸ
ವಿಡುವನು.
15 ಅವನು ಜೇಡರಬಲೆಯನ್ನು ಒರಗಿಕೊಳ್ಳುವನು,
ಆದರೆ ಬಲೆಯು ಕಿತ್ತುಹೋಗುವುದು. ಅವನು
ಜೇಡರಬಲೆಯನ್ನು ಹಿಡಿದುಕೊಳ್ಳುವನು, ಆದರೆ
ಅದು ಅವನಿಗೆ ಆಧಾರ ನೀಡುವುದಿಲ್ಲ.
16 ಅವನು ಬೇಕಾದಷ್ಟು ನೀರನ್ನೂ ಬಿಸಿಲನ್ನೂ
ಹೊಂದಿರುವ ಬಳ್ಳಿಯಂತಿರುವನು. ಆ ಬಳ್ಳಿಯ
ಕವಲುಗಳು ತೋಟದಲ್ಲೆಲ್ಲಾ ಹರಡಿಕೊಳ್ಳುತ್ತವೆ.
17 ಅದು ಕಲ್ಲು ಕುಪ್ಪೆಯ ಸುತ್ತಲೂ ತನ್ನ ಬೇರುಗಳನ್ನು
ಹೆಣೆದುಕೊಳ್ಳುವುದು ಕಲ್ಲುಗಳಲ್ಲಿ ಬೆಳೆಯಲು
ಒಂದು ಸ್ಥಳಕ್ಕಾಗಿ ನೋಡುವುದು.
18 ಆದರೆ ಆ ತೋಟವು, 'ನಾನು ನಿನ್ನನ್ನು ಮೊದಲು
ನೋಡಿಯೇ ಇಲ್ಲ' ಎಂದು ಹೇಳುತ್ತದೆ.
19 ಆದ್ದರಿಂದ ಆ ಬಳ್ಳಿ ಹೊಂದಿರುವ ಸಂತೋಷವೆಲ್ಲಾ
ಅಷ್ಟೇ. ಬಳಿಕ ಆ ಮಣ್ಣಿನಿಂದ ಇತರ ಸಸಿಗಳು
ಬೆಳೆಯುತ್ತವೆ.
20 ಆದರೆ ದೇವರು ಒಬ್ಬ ನಿರಪರಾಧಿಯನ್ನೂ ಕೈಬಿಡು
ವುದಿಲ್ಲ. ಆತನು ದುಷ್ಟರಿಗೆ ಸಹಾಯ
ಮಾಡುವುದಿಲ್ಲ.
21 ದೇವರು ಇನ್ನು ಮೇಲೆ ನಿನ್ನ ಬಾಯನ್ನು ನಗೆ
ಯಿಂದಲೂ ನಿನ್ನ ತುಟಿಗಳನ್ನು ಉತ್ಸಾಹದಿಂದಲೂ
ತುಂಬಿಸುವನು.
22 ಆದರೆ ನಿನ್ನನ್ನು ದ್ವೇಷಿಸುವವರಿಗೆ ದೇವರು ಅವ
ಮಾನಮಾಡುವನು; ದುಷ್ಟರ ಮನೆಗಳನ್ನು ನಾಶ
ಮಾಡುವನು.''

## ಯೋಬನ ವಾದ

9 ಬಳಿಕ ಯೋಬನು ಪ್ರತ್ಯುತ್ತರವಾಗಿ ಇಂತೆಂದನು:
2 ''ಹೌದು, ನೀನು ಹೇಳಿದ್ದು ಸತ್ಯವೇ ಸರಿ! ಆದರೆ
ಮನುಷ್ಯನು ದೇವರ ದೃಷ್ಟಿಯಲ್ಲಿ ನೀತಿವಂತ
ನಾಗಿರುವುದು ಹೇಗೆ?
3 ಒಬ್ಬನು ದೇವರೊಂದಿಗೆ ವಾದಿಸಬಯಸಿದರೆ,
ದೇವರ ಸಾವಿರ ಪ್ರಶ್ನೆಗಳಲ್ಲಿ ಮನುಷ್ಯನು
ಒಂದಕ್ಕೂ ಉತ್ತರ ಕೊಡಲಾರನು.
4 ದೇವರ ಜ್ಞಾನವು ಅಗಾಧವಾದದ್ದು; ಆತನ
ಶಕ್ತಿಯು ಮಹತ್ವವಾದದ್ದು. ಯಾವನೂ ದೇವರಿಗೆ
ವಿರೋಧವಾಗಿ ಜಯಗಳಿಸಲಾರನು.
5 ದೇವರು ಪರ್ವತಗಳನ್ನು ಅವುಗಳಿಗೇ ತಿಳಿಯ
ದಂತೆ ಸರಿಸಿ ಕೋಪದಿಂದ ಅವುಗಳನ್ನು
ಉರುಳಿಸುವನು.
6 ಆತನು ಭೂಮಿಯನ್ನು ಅದರ ಸ್ಥಳದೊಳಗಿಂದ
ಕದಲಿಸುವನು; ಅದರ ಅಸ್ತಿವಾರಗಳನ್ನು ನಡು
ಗಿಸುವನು.
7 ಆತನು ಆಜ್ಞಾಪಿಸಿದರೆ, ಆತನ ಆಜ್ಞೆಯಂತೆಯೇ
ಸೂರ್ಯೋದಯವಾಗದು. ನಕ್ಷತ್ರಗಳು ಪ್ರಕಾಶಿ
ದಂತೆ ಆತನು ಅವುಗಳನ್ನು ಮುಚ್ಚಿಟ್ಟು ಮುದ್ರೆ
ಹಾಕಬಲ್ಲನು.
8 ಆಕಾಶಮಂಡಲವನ್ನು ಸೃಷ್ಟಿಸಿದವನು ಆತನೇ.
ಆತನು ಭೋರ್ಗರೆಯುತ್ತಿರುವ ಸಮುದ್ರದ
ಮೇಲೆ ನಡೆಯಬಲ್ಲನು.
9 ''ಆತನೇ ಬೇರ್, ಒರೈಯನ್ ಮತ್ತು ಪ್ಲೈಆಡ್ಸ್
ಎಂಬ ನಕ್ಷತ್ರ ಸಮೂಹಗಳನ್ನು ಸೃಷ್ಟಿಮಾಡಿದನು.
ದಕ್ಷಿಣ ಆಕಾಶದಲ್ಲಿ ನಕ್ಷತ್ರವ್ಯೂಹಗಳನ್ನು ಸೃಷ್ಟಿಸಿದ
ವನು ಆತನೇ.
10 ಗ್ರಹಿಸಲಶಕ್ಯವಾದ ಅದ್ಭುತ ಕಾರ್ಯಗಳನ್ನೂ
ಅಸಂಖ್ಯಾತವಾದ ಮಹತ್ಕಾರ್ಯಗಳನ್ನೂ ಆತನು
ಮಾಡುವನು.
11 ದೇವರು ನನ್ನ ಸಮೀಪದಲ್ಲಿ ಹಾದುಹೋದರೂ
ನನಗೆ ಕಾಣಿಸದು; ನನ್ನ ಮುಂದೆ ಹೋದರೂ ನನಗೆ
ತಿಳಿಯದು.
12 ದೇವರೇ ತೆಗೆದುಕೊಳ್ಳುವುದಾದರೆ, ಆತನನ್ನು
ತಡೆಯಬಲ್ಲವರು ಯಾರು? 'ನೀನು ಏನು
ಮಾಡುತ್ತಿರುವೆ' ಎಂದು ಆತನನ್ನು ಕೇಳುವವರು
ಯಾರು?
13 ದೇವರು ತನ್ನ ಕೋಪವನ್ನು ತಡೆಹಿಡಿದು
ಕೊಳ್ಳುವುದಿಲ್ಲ. ರಹಬನ★ ಸಹಾಯಕರು ಸಹ

**ರಹಬ** ಪುರಾಣಕಥೆಯಲ್ಲಿ ಸಮುದ್ರ ಪ್ರಾಣಿಗೆ ರಹಬ ಎಂದು ಕರೆಯಲಾಗಿದೆ. ಯಾವುದೇ ಕೆಟ್ಟದ್ದಕ್ಕಾಗಲೀ ರಹಬ ಸಂಕೇತ ವಾಗಿದೆಯೆಂದು ಜನರು ಭಾವಿಸಿಕೊಂಡಿದ್ದರು.

ದೇವರ ಮುಂದೆ, ಬಯದಿಂದ ಅಡ್ಡ
ಬೀಳುವರು.
14 ‘‘ಆದ್ದರಿಂದ ನಾನು ದೇವರೊಂದಿಗೆ ವಾದ ಮಾಡ
ಲಾರೆ. ಆತನಿಗೆ ಉತ್ತರ ಕೊಡುವುದಕ್ಕೂ ನಾನು
ಅಶಕ್ತನಾಗಿರುವೆ.
15 ಯೋಬನಾದ ನಾನು ನಿರಪರಾಧಿಯಾಗಿದ್ದರೂ
ಆತನಿಗೆ ಉತ್ತರವನ್ನು ಕೊಡಲಾರೆ. ನನಗೆ ಕರುಣೆ
ತೋರುವಂತೆ ನ್ಯಾಯಾಧಿಪತಿಯಾದ ದೇವರನ್ನು
ಬೇಡಿಕೊಳ್ಳುವೆನು.
16 ನಾನು ಆತನಿಗೆ ಮೊರೆಯಿಟ್ಟಿದ್ದರೂ, ಆತನು ನನಗೆ
ಉತ್ತರಕೊಟ್ಟಿದ್ದರೂ ಈಗ ಆತನು ನನಗೆ ಕಿವಿ
ಗೊಡುತ್ತಾನೆ ಎಂಬುದರಲ್ಲಿ ನನಗೆ ನಂಬಿಕೆಯಿಲ್ಲ.
17 ನನ್ನನ್ನು ಜಜ್ಜುವುದಕ್ಕಾಗಿ ದೇವರು ಬಿರುಗಾಳಿ
ಗಳನ್ನು ಕಳುಹಿಸುವನು; ನಿಷ್ಕಾರಣವಾಗಿ ನನಗೆ
ಗಾಯಮಾಡುವನು.
18 ಉಸಿರೆಳೆದುಕೊಳ್ಳಲೂ ಬಿಡುವು ನೀಡದೆ ಕಷ್ಟದ
ಮೇಲೆ ಕಷ್ಟವನ್ನು ಕೊಡುವನು.
19 ಆತನನ್ನು ಸೋಲಿಸೋಣವೆಂದರೆ ಆತನೇ ಬಲಿಷ್ಠ
ನಾಗಿದ್ದಾನೆ; ನ್ಯಾಯಾಲಯಕ್ಕೆ ಹೋಗೋಣ
ಎಂದರೆ ಆತನನ್ನು ನ್ಯಾಯಾಲಯಕ್ಕೆ ಬರಮಾಡು
ವವನು ಯಾರು?
20 ನಾನು ನಿರಪರಾಧಿಯಾಗಿದ್ದರೂ ನನ್ನ ಬಾಯಿ
ನನ್ನನ್ನು ಖಂಡಿಸುವುದು; ನಾನು ನಿರ್ದೋಷಿ
ಯಾಗಿದ್ದರೂ ನನ್ನ ಬಾಯಿ ನನ್ನನ್ನು ದೋಷಿ
ಯೆಂದು ಹೇಳುವುದು.
21 ನಾನು ನಿರಪರಾಧಿಯಾಗಿದ್ದರೂ ನನ್ನ ಬಗ್ಗೆ ಚಿಂತಿ
ಸುವುದಿಲ್ಲ; ನನ್ನ ಜೀವಿತವನ್ನೇ ತುಚ್ಛೀಕರಿಸುವೆನು.
22 ಜೀವಿತದಲ್ಲಿ ಎಲ್ಲರೂ ಒಂದೇ. ಆದ್ದರಿಂದ ಆತನು
ಅಪರಾಧಿಗಳನ್ನೂ ನಿರಪರಾಧಿಗಳನ್ನೂ ನಾಶ
ಮಾಡುತ್ತಾನೆ’’ ಎಂಬುದು ನನ್ನ ಆಲೋಚನೆ.
23 ಪಕ್ಕನೆ ಆಪತ್ತಿಗೊಳಗಾಗಿ ನಿರಪರಾಧಿಯು ಸತ್ತರೆ,
ದೇವರು ಅವನನ್ನು ನೋಡುತ್ತಾ ನಗುವನೇ?
24 ದುಷ್ಟನು ಭೂಮಿಯನ್ನು ಆಕ್ರಮಿಸಿಕೊಂಡಾಗ,
ದೇವರು ಅದನ್ನು ನ್ಯಾಯಾಧಿಪತಿಗಳಿಗೆ ಮರೆ
ಮಾಡುವನೇ? ಇದು ಸತ್ಯವಾಗಿದ್ದರೆ, ಇದನ್ನು
ದೇವರಲ್ಲದೆ ಯಾರು ಮಾಡಿದರು?

25 ‘‘ನನ್ನ ದಿನಗಳು ಓಟಗಾರನಿಗಿಂತಲೂ ವೇಗವಾಗಿ
ಹೋಗುತ್ತಿವೆ. ಸುಖವಿಲ್ಲದ ನನ್ನ ದಿನಗಳು ಹಾರಿ
ಹೋಗುತ್ತಿವೆ.
26 ಜಂಬುಗಿಡದಿಂದ ಮಾಡಿದ ದೋಣಿಗಳಂತೆಯೂ
ಹದ್ದು ತನ್ನ ಬೇಟೆಯ ಮೇಲೆ ಎರಗಲು ಹಾರಿ
ಹೋಗುವಂತೆಯೂ ನನ್ನ ದಿನಗಳು ವೇಗವಾಗಿ
ಹೋಗುತ್ತಿವೆ.
27 ‘‘ನಾನು ದೂರು ಹೇಳುವುದಿಲ್ಲ. ನನ್ನ ನೋವನ್ನು
ಮರೆತು ನನ್ನ ಮುಖವನ್ನು ಮಾರ್ಪಡಿಸಿಕೊಂಡು
ನಗುವೆನೆಂದರೆ,
28 ನನ್ನ ಎಲ್ಲಾ ಸಂಕಟಗಳಿಂದ ಇನ್ನೂ ಭಯಗೊಂಡಿ
ರುವೆ. ಯಾಕಂದರೆ ನನ್ನನ್ನು ಅಪರಾಧಿಯೆಂದು
ದೇವರು ಹೇಳುತ್ತಿದ್ದಾನೆ.
29 ಅಪರಾಧಿಯೆಂದು ಈಗಾಗಲೇ ನನಗೆ
ತೀರ್ಪಾಗಿದೆ. ಹೀಗಿರಲು ನಾನೇಕೆ ವ್ಯರ್ಥ ಪ್ರಯತ್ನ
ಮಾಡಲಿ?
30 ನಾನು ಹಿಮದಿಂದ ಸ್ನಾನಮಾಡಿದರೂ ಸಾಬೂನಿ
ನಿಂದ ಕೈತೊಳೆದುಕೊಂಡರೂ
31 ದೇವರು ನನ್ನನ್ನು ಮಣ್ಣಿನ ಗುಂಡಿಗೆ ತಳ್ಳಿ ನನ್ನ ಬಟ್ಟೆ
ಗಳಿಗೇ ನಾನು ಅಸಹ್ಯವಾಗುವಂತೆ ಮಾಡುವನು.
32 ‘‘ದೇವರು ನನ್ನಂಥ ಮನುಷ್ಯನಲ್ಲ. ನಾನು ಆತನಿಗೆ
ಉತ್ತರಿಸಲಾರೆ. ನಾವು ನ್ಯಾಯಾಲಯದಲ್ಲಿ ಒಬ್ಬರ
ನ್ನೊಬ್ಬರು ಸಂಧಿಸಲಾರೆವು.
33 ನಮ್ಮಿಬ್ಬರಿಗೆ ಮಧ್ಯಸ್ತಗಾರನಿದ್ದರೆ, ನಮ್ಮಿಬ್ಬರ
ಮೇಲೆ ಅಧಿಕಾರವುಳ್ಳವನಿದ್ದರೆ ಎಷ್ಟೋ ಚೆನ್ನಾಗಿ
ರುತ್ತಿತ್ತು. (ಆದರೆ ಅಂಥವರು ಯಾರೂ ಇಲ್ಲ.)
34 ದೇವರ ದಂಡವನ್ನು ತೆಗೆದುಹಾಕುವ ಮಧ್ಯಸ್ತಗಾರ
ನಿದ್ದರೆ ಎಷ್ಟೋ ಚೆನ್ನಾಗಿರುತ್ತಿತ್ತು. ಆಗ ಆತನು
ನನ್ನನ್ನು ಹೆದರಿಸುತ್ತಿರಲಿಲ್ಲ.
35 ಆಗ ನಾನು ಭಯವಿಲ್ಲದೆ ಮಾತಾಡುತ್ತಿದ್ದೆನು;
ಆದರೆ ಈಗ ನನಗೆ ಸಾಧ್ಯವೇ ಇಲ್ಲ.’’

10 ಯೋಬನು ತನ್ನ ಮಾತನ್ನು ಮುಂದುವರಿ
ಸಿದನು: ನನ್ನ ಜೀವಿತವೇ ನನಗೆ ಅಸಹ್ಯ
ವಾಗಿದೆ. ಹೃದಯ ಬಿಚ್ಚಿ ಮೊರೆಯಿಡುವೆನು;
ಮನೋವ್ಯಥೆಯಿಂದ ನುಡಿಯುವೆನು.
2 ನಾನು ದೇವರಿಗೆ ಹೀಗೆ ಹೇಳುತ್ತೇನೆ: ‘ನನ್ನನ್ನು
ಖಂಡಿಸದೆ ಹೇಳು! ನಾನೇನು ತಪ್ಪುಮಾಡಿರುವೆ?
ನನಗೆ ವಿರೋಧವಾಗಿ ನಿನ್ನಲ್ಲಿರುವ ದೂರುಗ
ಳೇನು?
3 ದೇವರೇ, ನನ್ನನ್ನು ನೋಯಿಸುವುದು ನಿನಗೆ
ಸಂತೋಷವೇ? ನಿನ್ನ ಸೃಷ್ಟಿಯನ್ನೇ ನೀನು ಚಿಂತಿಸ
ದಂತೆ ತೋರುತ್ತಿದೆ. ದುಷ್ಟರ ಆಲೋಚನೆಗಳಲ್ಲಿ
ನಿನಗೆ ಸಂತೋಷವೇ?
4 ದೇವರೇ. ನಿನಗೆ ಮನುಷ್ಯರ ಕಣ್ಣುಗಳಿವೆಯೋ?
ಮನುಷ್ಯರು ನೋಡುವಂತೆ ನೀನು ನೋಡು
ವಿಯೋ?

5 ನಿನ್ನ ಜೀವಿತದ ದಿನಗಳು ನಮ್ಮಂತೆ ಕೊಂಚವಲ್ಲ.
ನಿನ್ನ ವರ್ಷಗಳು ಮನುಷ್ಯನ ವರ್ಷಗಳಂತೆ
ಕೊಂಚವಲ್ಲ.
6 ನೀನು ನನ್ನ ತಪ್ಪಿಗಾಗಿ ನೋಡುವೆ; ನನ್ನ ಪಾಪಕ್ಕಾಗಿ
ಹುಡುಕುವೆ.
7 ಆದರೆ ನಾನು ನಿರಪರಾಧಿಯೆಂದು ನಿನಗೆ ಗೊತ್ತದೆ.
ಆದರೆ ಯಾರೂ ನನ್ನನ್ನು ನಿನ್ನ ಶಕ್ತಿಯಿಂದ ಬಿಡಿಸ
ಲಾರರು!
8 ನನ್ನನ್ನು ಸೃಷ್ಟಿಸಿದ್ದೂ ನನ್ನ ದೇಹವನ್ನು ರೂಪಿಸಿದ್ದೂ
ನಿನ್ನ ಕೈಗಳೇ. ಈಗಲಾದರೋ ನೀನು ನನ್ನನ್ನು ನಾಶ
ಮಾಡುತ್ತಿರುವೆ!
9 ದೇವರೇ, ನೀನು ನನ್ನನ್ನು ಮಣ್ಣಿನಂತೆ ಮಾಡಿರುವೆ
ಎಂಬುದನ್ನು ಜ್ಞಾಪಿಸಿಕೋ. ಈಗ ನನ್ನನ್ನು ಮತ್ತೆ
ಧೂಳನ್ನಾಗಿ ಯಾಕೆ ಮಾರ್ಪಡಿಸುತ್ತಿರುವೆ?
10 ನೀನು ನನ್ನನ್ನು ಹಾಲಿನಂತೆ ಸುರಿದುಬಿಟ್ಟಿರುವೆ;
ಬೆಣ್ಣೆಮಾಡುವವನಂತೆ ನನ್ನನ್ನು ಕಡೆದು ಮಾರ್ಪಡಿ
ಸಿರುವೆ.*
11 ನೀನು ನನ್ನನ್ನು ಎಲುಬುಗಳಿಂದಲೂ ನರಗ
ಳಿಂದಲೂ ಹೆಣೆದು ಮಾಂಸವನ್ನೂ ಚರ್ಮವನ್ನೂ
ಹೊದಿಸಿರುವೆ.
12 ನೀನು ನನಗೆ ಜೀವವನ್ನು ಕೊಟ್ಟು ದಯೆ
ತೋರಿರುವೆ. ನೀನು ನನ್ನನ್ನು ಪರಿಪಾಲಿಸಿ ನನ್ನ
ಆತ್ಮವನ್ನು ಕಾಪಾಡಿದೆ.
13 “ಆದರೆ ನಿನ್ನ ಹೃದಯದಲ್ಲಿ ಮರೆಮಾಡಿಕೊಂಡಿದ್ದು
ಇದನ್ನೇ; ನಿನ್ನ ಹೃದಯದಲ್ಲಿ ನೀನು ರಹಸ್ಯವಾಗಿ
ಆಲೋಚಿಸಿದ್ದೂ ಇದನ್ನೇ. ಹೌದು, ನಿನ್ನ ಮನಸ್ಸಿ
ನಲ್ಲಿ ಇದೇ ಇತ್ತೆಂದು ನನಗೆ ಗೊತ್ತಿದೆ:
14 ನಾನು ಪಾಪ ಮಾಡಿದರೆ ನೀನು ನನ್ನನ್ನು ಗಮನಿ
ಸುವೆ; ನಾನು ಮಾಡಿದ ತಪ್ಪಿಗಾಗಿ ನನ್ನನ್ನು ಶಿಕ್ಷಿಸುವೆ.
15 ನಾನು ದೋಷಿಯಾಗಿದ್ದರೆ, ನನ್ನ ಗತಿಯನ್ನು ಏನು
ಹೇಳಲಿ? ನಾನು ನಿರಪರಾಧಿಯಾಗಿದ್ದರೂ ನನ್ನ
ಶ್ರಮೆಗಳನ್ನು ನೋಡುತ್ತಾ ಅವಮಾನದಿಂದ ನನ್ನ
ತಲೆಯೆತ್ತಲಾರೆ.
16 ತಲೆಯೆತ್ತಿದ್ದರೆ, ನೀನು ಸಿಂಹದಂತಾಗಿ ನನ್ನನ್ನು
ಬೇಟೆಯಾಡುವೆ; ನಿನ್ನ ಶಕ್ತಿಯನ್ನು ನನಗೆ ವಿರೋಧ
ವಾಗಿ ಮತ್ತೆ ತೋರಿಸುವೆ.
17 ನನ್ನನ್ನು ದೋಷಿಯೆಂದು ನಿರೂಪಿಸಲು ನಿನ್ನ
ಬಳಿಯಲ್ಲಿ ಯಾರಾದರೊಬ್ಬರು ಇದ್ದೇ ಇರುವರು.
ನಿನ್ನ ಕೋಪವು ನನಗೆ ವಿರೋಧವಾಗಿ ಹೆಚ್ಚೆಚ್ಚಾಗು
ವುದು. ನೀನು ನನಗೆ ವಿರೋಧವಾಗಿ ಹೊಸ
ಸೈನ್ಯಗಳನ್ನು ತರುವೆ.
18 ದೇವರೇ, ನಾನು ಜನಿಸಲು ನೀನೇಕೆ ಅವಕಾಶ
ಕೊಟ್ಟೆ? ಯಾರೂ ನನ್ನನ್ನು ನೋಡುವುದಕ್ಕಿಂತ
ಮೊದಲೇ ನಾನು ಸತ್ತುಹೋಗಬೇಕಿತ್ತು.
19 ಎಂದೂ ಜೀವಿಸಿಲ್ಲದ ವ್ಯಕ್ತಿಯಂತೆ ನಾನಿರಬೇಕಿತ್ತು.
ನನ್ನ ತಾಯಿಯ ಗರ್ಭದಿಂದ ನನ್ನನ್ನು ನೇರವಾಗಿ
ಸಮಾಧಿಗೆ ಹೊತ್ತುಕೊಂಡು ಹೋಗಬೇಕಿತ್ತು.
20-21 ನನ್ನ ಜೀವಿತವು ಬಹುಮಟ್ಟಿಗೆ ಮುಗಿದು
ಹೋಗಿದೆ. ಆದ್ದರಿಂದ ನನ್ನನ್ನು ಒಬ್ಬಂಟಿಗನನ್ನಾಗಿ
ಬಿಟ್ಟುಬಿಡು! ಯಾರೂ ಮರಳಿ ಬರಲಾಗದಂಥ
ಕತ್ತಲೆಯ ಸ್ಥಳಕ್ಕೂ ಮರಣಾಂಧಕಾರದ ಸ್ಥಳಕ್ಕೂ
ಹೋಗುವ ಮೊದಲೇ ನನಗಿರುವ ಅಲ್ಪಕಾಲವನ್ನು
ಆನಂದಿಸಲು ಅವಕಾಶಕೊಡು.
22 ಆ ಸ್ಥಳವು ಕತ್ತಲೆಯಿಂದಲೂ ಮರಣಾಂಧಕಾರ
ದಿಂದಲೂ ಗಲಿಬಿಲಿಯಿಂದಲೂ ಕೂಡಿದೆ. ಅಲ್ಲಿನ
ಬೆಳಕು ಸಹ ಕತ್ತಲೆಯೇ!”

### ಚೋಫರನ ವಾದ

11 ಆಗ ನಾಮಾಥ್ಯ ದೇಶದ ಚೋಫರನು
ಯೋಬನಿಗೆ ಉತ್ತರಿಸಿದನು:
2 “ಮಾತುಗಳ ಈ ಪ್ರವಾಹಕ್ಕೆ ಯಾರಾದರೊಬ್ಬರು
ಉತ್ತರ ಕೊಡಬೇಕು! ಇಷ್ಟೆಲ್ಲಾ ಮಾತುಗಳು
ಯೋಬನನ್ನು ನೀತಿವಂತನನ್ನಾಗಿ ಮಾಡುತ್ತ
ವೆಯೋ? ಇಲ್ಲ!
3 ಯೋಬನೇ, ಅರ್ಥರಹಿತವಾದ ನಿನ್ನ ಮಾತುಗಳಿಗೆ
ನಮ್ಮಲ್ಲಿ ಉತ್ತರವೇ ಇಲ್ಲವೆಂದು ಆಲೋಚಿಸಿ
ಕೊಂಡಿರುವೆಯಾ? ನೀನು ದೇವರನ್ನು ಅಪಹಾಸ್ಯ
ಮಾಡುವಾಗ ಯಾರೂ ನಿನ್ನನ್ನು ಎಚ್ಚರಿಸುವುದಿಲ್ಲ
ಎಂದುಕೊಂಡಿರುವಿಯಾ?
4 ಯೋಬನೇ, ನೀನು ದೇವರಿಗೆ ‘ನನ್ನ ವಾದಗಳು
ಸರಿಯಾಗಿವೆ, ನಿನ್ನ ದೃಷ್ಟಿಯಲ್ಲಿ ನಾನು ಶುದ್ಧ
ನಾಗಿರುವೆ’ ಎಂದು ಹೇಳಿದೆಯಲ್ಲವೇ?
5 ದೇವರು ನಿನಗೆ ಉತ್ತರ ನೀಡಿ ನಿನ್ನನ್ನು ತಪ್ಪಿತಸ್ಥ
ನೆಂದು ಹೇಳಿದರೆ ಎಷ್ಟೋ ಒಳ್ಳೆಯದು.
6 ಆತನು ನಿನಗೆ ಜ್ಞಾನದ ರಹಸ್ಯಗಳನ್ನು ತಿಳಿಸಿ ಜ್ಞಾನಕ್ಕೆ
ಎರಡು ಮುಖಗಳಿವೆ ಎಂದು ತೋರಿಸಿಕೊಟ್ಟರೆ
ಎಷ್ಟೋ ಲೇಸು. ದೇವರು ನಿನಗೆ ತಕ್ಕ ದಂಡನೆ
ಯನ್ನು ವಿಧಿಸಿಲ್ಲವೆಂಬುದು ನಿನಗೆ ತಿಳಿದಿರಲಿ.
7 “ನೀನು ದೇವರ ರಹಸ್ಯಗಳನ್ನು ಅರ್ಥಮಾಡಿಕೊಳ್ಳ
ಬಲ್ಲೆಯಾ? ಸರ್ವಶಕ್ತನಾದ ದೇವರ ಜ್ಞಾನದ
ಮೇರೆಗಳನ್ನು ತಿಳಿದುಕೊಳ್ಳಬಲ್ಲೆಯಾ?

---

**ನೀನು …ಮಾರ್ಪಡಿಸಿರುವೆ** ಇಲ್ಲಿ ಯೋಬನು ತನ್ನ ತಾಯಿಯ ಗರ್ಭದಲ್ಲಿ ತಾನು ಗರ್ಭಧರಿಸಿದ್ದನ್ನು ಉಧಾಹರಿಸಿ ಹೇಳುತ್ತಿದ್ದಾನೆ. ಹಾಲನ್ನು ಕಡೆದು ಬೆಣ್ಣೆ ಮಾಡುವಂತೆ ಎಂಬ ರೂಪಕವನ್ನು ಬಳಸಿದ್ದಾನೆ.

8 ದೇವರ ಜ್ಞಾನವು ಆಕಾಶಕ್ಕಿಂತಲೂ ಎತ್ತರವಾಗಿದೆ. ಅದನ್ನು ಅರ್ಥಮಾಡಿಕೊಳ್ಳಲು ನಿನಗೆ ಸಾಧ್ಯವೇ ಇಲ್ಲ. ಅದು ಮೃತ್ಯುಲೋಕಕ್ಕಿಂತಲೂ ಆಳವಾಗಿದೆ. ನೀನು ಅದನ್ನು ಗ್ರಹಿಸಿಕೊಳ್ಳಲಾರೆ.
9 ದೇವರ ಜ್ಞಾನವು ಭೂಮಿಗಿಂತಲೂ ಉದ್ದವಾಗಿದೆ; ಸಮುದ್ರಕ್ಕಿಂತಲೂ ಅಗಲವಾಗಿದೆ.
10 ‘‘ದೇವರು ನಿನ್ನನ್ನು ಬಂಧಿಸಿ ನ್ಯಾಯಾಲಯಕ್ಕೆ ಎಳೆದುಕೊಂಡು ಬರುವುದಾದರೆ ಆತನನ್ನು ತಡೆಯಬಲ್ಲವರು ಯಾರು?
11 ಅಯೋಗ್ಯರು ಯಾರೆಂಬುದು ದೇವರಿಗೆ ಚೆನ್ನಾಗಿ ಗೊತ್ತಿದೆ. ಆತನು ಕೆಟ್ಟದ್ದನ್ನು ಕಂಡಾಗ ಗಮನಿಸುವನು.
12 ಕಾಡುಕತ್ತೆಯು ಮನುಷ್ಯನನ್ನು ಹೇಗೆ ಹೆರಲಾರದೊ ಅದೇ ರೀತಿಯಲ್ಲಿ ದಡ್ಡನು ಎಂದಿಗೂ ಜ್ಞಾನಿಯಾಗಲಾರನು.
13 ‘‘ಯೋಬನೇ, ನಿನ್ನ ಕೈಗಳನ್ನು ಮೇಲೆತ್ತಿ ದೇವರೊಬ್ಬನನ್ನೇ ಆರಾಧಿಸುವುದಕ್ಕಾಗಿ ನಿನ್ನ ಹೃದಯವನ್ನು ಸಿದ್ಧಪಡಿಸಿಕೋ.
14 ನೀನು ಪಾಪವನ್ನು ಹಿಡಿದುಕೊಂಡಿದ್ದರೆ ಅದನ್ನು ನಿನ್ನಿಂದ ದೂರಮಾಡು. ದುಷ್ಟತನವು ನಿನ್ನ ಗುಡಾರಗಳಲ್ಲಿ ವಾಸಿಸದಿರಲಿ.
15 ಆಗ ನೀನು ಖಂಡಿತವಾಗಿ ನಾಚಿಕೆಯಿಲ್ಲದೆ ತಲೆಯೆತ್ತುವೆ; ಸ್ಥಿರವಾಗಿ ನಿಂತುಕೊಂಡು ನಿರ್ಭಯದಿಂದಿರುವೆ
16 ಯೋಬನೇ, ಆಗ ನೀನು ನಿನ್ನ ಕಷ್ಟವನ್ನು ಮರೆತುಬಿಡುವೆ; ಹರಿದು ಹೋದ ನೀರನ್ನೋ ಎಂಬಂತೆ ನಿನ್ನ ಕಷ್ಟಗಳನ್ನು ಜ್ಞಾಪಿಸಿಕೊಳ್ಳುವೆ.
17 ನಿನ್ನ ಜೀವಿತವು ಮಧ್ಯಾಹ್ನದ ಸೂರ್ಯನಿಗಿಂತಲೂ ಹೆಚ್ಚು ಪ್ರಕಾಶಮಾನವಾಗಿರುವುದು. ನಿನ್ನ ಜೀವಿತದ ಕಾರ್ಗತ್ತಲೆಯ ತಾಸುಗಳು ಮುಂಜಾನೆಯ ಸೂರ್ಯನಂತೆ ಹೊಳೆಯುತ್ತವೆ.
18 ಯೋಬನೇ, ನಿನಗೆ ನಿರೀಕ್ಷೆಯಿರುವುದರಿಂದ ಸುರಕ್ಷಿತನಾಗಿರುವೆ. ಆತನು ನಿನ್ನನ್ನು ಪರಿಪಾಲಿಸುತ್ತಾ ನಿನಗೆ ವಿಶ್ರಾಂತಿಯನ್ನು ದಯಪಾಲಿಸುವನು.
19 ಆಗ ನೀನು ಮಲಗಿ ವಿಶ್ರಮಿಸಿಕೊಳ್ಳುವೆ; ಯಾರೂ ನಿನಗೆ ಭಯಹುಟ್ಟಿಸುವುದಿಲ್ಲ. ಅನೇಕರು ನಿನ್ನ ಸಹಾಯಕ್ಕಾಗಿಯೇ ಕೇಳಿಕೊಳ್ಳುವರು.
20 ಆದರೆ ದುಷ್ಟರು ಸಹಾಯಕ್ಕಾಗಿ ಎದುರು ನೋಡಿದರೂ ತಮ್ಮ ಆಪತ್ತುಗಳಿಂದ ಪಾರಾಗಲು ಅವರಿಗೆ ಸಾಧ್ಯವಿಲ್ಲ. ಅವರ ನಿರೀಕ್ಷೆಯೇ ಅವರನ್ನು ಮರಣಕ್ಕೆ ನಡೆಸುತ್ತದೆ.

## ಯೋಬನ ವಾದ

12 ಆ ಮೇಲೆ ಯೋಬನು ಚೋಫರನಿಗೆ ಹೀಗೆ ಉತ್ತರಿಸಿದನು:
2 ‘‘ನೀವು ನಿಮ್ಮನ್ನೇ ಜ್ಞಾನಿಗಳೆಂದು ಆಲೋಚಿಸಿಕೊಂಡಿದ್ದೀರಿ. ನೀವು ಸಾಯುವಾಗ ಜ್ಞಾನವು ನಿಮ್ಮೊಡನೆಯೇ ಸಾಯುವುದು.
3 ಆದರೆ ನನ್ನ ಮನಸ್ಸು ನಿಮ್ಮ ಮನಸ್ಸಿನಂತೆಯೇ ಒಳ್ಳೆಯದಾಗಿದೆ. ನಾನು ನಿಮ್ಮಂತೆಯೇ ಬುದ್ಧಿವಂತನಾಗಿರುವೆ. ಇದು ಸತ್ಯವೆಂದು ಯಾರು ಬೇಕಾದರೂ ತಿಳಿದುಕೊಳ್ಳಬಲ್ಲರು.
4 ‘‘ಈಗ ನನ್ನ ಸ್ನೇಹಿತರು ನನ್ನನ್ನು ನೋಡಿ ನಗುವರು, ‘ಹೌದು, ನಾನು ದೇವರಿಗೆ ಪ್ರಾರ್ಥಿಸುವೆನು; ಆತನು ನನಗೆ ಉತ್ತರಿಸುವನು. ನಾನು ನೀತಿವಂತನಾಗಿದ್ದರೂ ನಿರ್ದೋಷಿಯಾಗಿದ್ದರೂ ಪರಿಹಾಸ್ಯಕ್ಕೆ ಗುರಿಯಾಗಿದ್ದೇನೆ.’
5 ಆಪತ್ತಿಗೆ ಗುರಿಯಾಗಿಲ್ಲದವರು ಆಪತ್ತಿನಿಂದ ಕಷ್ಟಪಡುತ್ತಿರುವ ಜನರನ್ನು ಗೇಲಿಮಾಡುವರು; ಜಾರಿಬಿದ್ದವನಿಗೆ ಹೊಡೆಯುವರು.
6 ಕಳ್ಳರ ಗುಡಾರಗಳಿಗೆ ತೊಂದರೆಯಿಲ್ಲ; ತಮ್ಮ ದೇವರುಗಳನ್ನು ಕೈಗಳಲ್ಲಿ ಎತ್ತಿಕೊಂಡು ಹೋಗುತ್ತಾ ದೇವರನ್ನು ರೇಗಿಸುವವರು ಸಮಾಧಾನದಿಂದ ಜೀವಿಸುವರು.
7 ‘‘ಆದರೆ ಪ್ರಾಣಿಗಳನ್ನು ಕೇಳು, ಅವು ನಿನಗೆ ಉಪದೇಶಿಸುತ್ತವೆ. ಆಕಾಶದ ಪಕ್ಷಿಗಳನ್ನು ಕೇಳು, ಅವು ನಿನಗೆ ಹೇಳುತ್ತವೆ.
8 ಭೂಮಿಯೊಂದಿಗೆ ಮಾತಾಡು, ಅದು ನಿನಗೆ ಉಪದೇಶಿಸುತ್ತದೆ. ಸಮುದ್ರದ ಮೀನುಗಳು ತಮ್ಮ ಜ್ಞಾನವನ್ನು ನಿನಗೆ ತಿಳಿಸಲಿ.
9 ಇದನ್ನು ಮಾಡಿದಾತನು ಯೆಹೋವನೇ ಎಂಬುದು ಈ ಸೃಷ್ಟಿಗಳಲ್ಲಿ ಪ್ರತಿಯೊಂದಕ್ಕೂ ಗೊತ್ತು.
10 ಪ್ರತಿಯೊಂದು ಪ್ರಾಣಿಯ ಜೀವವೂ ಪ್ರತಿಯೊಬ್ಬ ವ್ಯಕ್ತಿಯ ಆತ್ಮವೂ ದೇವರ ಕೈಯಲ್ಲಿವೆ.
11 ಆದರೆ ನಾಲಿಗೆಯು ಊಟದ ರುಚಿಯನ್ನು ಆನಂದಿಸುವಂತೆ ಕಿವಿಗಳು ಮಾತುಗಳನ್ನು ವಿವೇಚಿಸುವುದಿಲ್ಲವೇ?
12 ‘ಜ್ಞಾನವು ವೃದ್ಧರಲ್ಲಿಲ್ಲವೇ? ದೀರ್ಘಾಯುಷ್ಯವು ತಿಳುವಳಿಕೆಯನ್ನು ಉಂಟುಮಾಡುವುದಿಲ್ಲವೇ?
13 ‘‘ಜ್ಞಾನವೂ ಶಕ್ತಿಯೂ ಆತನವೇ. ಆಲೋಚನೆಯೂ ತಿಳುವಳಿಕೆಯೂ ಆತನವೇ.
14 ದೇವರು ಕೆಡವಿದ್ದನ್ನು ಮತ್ತೆ ಕಟ್ಟುವುದಕ್ಕಾಗಲೀ ಸೆರೆಗೆ ಹಾಕಿದವನನ್ನು ಬಿಡಿಸುವುದಕ್ಕಾಗಲೀ ಯಾರಿಗೂ ಸಾಧ್ಯವಿಲ್ಲ.

15 ದೇವರು ಮಳೆಯನ್ನು ತಡೆಹಿಡಿದರೆ ಭೂಮಿಗೆ
ಬರಗಾಲವಾಗುವುದು. ಮಳೆಯನ್ನು ಸುರಿಸಿದರೆ
ಭೂಮಿಯ ಮೇಲೆ ಪ್ರವಾಹವಾಗುವುದು.
16 ದೇವರು ಬಲಿಷ್ಠನಾಗಿರುವುದರಿಂದ ಯಾವಾಗಲೂ
ಜಯಗಳಿಸುತ್ತಾನೆ. ಗೆಲ್ಲುವವರೂ ಸೋಲುವ
ವರೂ ಆತನವರೇ!
17 ದೇವರು ಮಂತ್ರಿಗಳ ಜ್ಞಾನವನ್ನು ತೆಗೆದು
ಹಾಕುವನು. ನ್ಯಾಯಾಧಿಪತಿಗಳನ್ನು ಮೂರ್ಖರ
ನ್ನಾಗಿ ಮಾಡುವನು.
18 ರಾಜರುಗಳು ಜನರಿಗೆ ಬೇಡಿಗಳನ್ನು ಹಾಕಿಸಿದರೆ
ದೇವರು ಅವುಗಳನ್ನು ಕಿತ್ತೊಗೆದು ರಾಜರುಗಳ
ಸೊಂಟಕ್ಕೆ ಚಿಂದಿಬಟ್ಟೆಯನ್ನು ಕಟ್ಟಿಸುವನು.
19 ದೇವರು ಯಾಜಕರುಗಳ ಅಧಿಕಾರವನ್ನು ಕಿತ್ತೊಗೆ
ಯುವನು; ಪ್ರಧಾನರನ್ನು ದಬ್ಬಿಬಿಡುವನು.
20 ದೇವರು ವಿಶ್ವಾಸನೀಯವಾದ ಆಲೋಚನಾಗಾರ
ರನ್ನು ಮೌನಗೊಳಿಸುವನು; ಹಿರಿಯರ ಜ್ಞಾನವನ್ನು
ತೆಗೆದುಹಾಕುವನು.
21 ದೇವರು ಪ್ರಮುಖರಿಗೆ ಅವಮಾನ ಮಾಡುವನು;
ಅಧಿಪತಿಗಳ ಶಕ್ತಿಯನ್ನು ತೆಗೆದುಹಾಕುವನು.*
22 ಕಾರ್ಗತ್ತಲೆಯೊಳಗಿರುವ ನಿಗೂಢ ರಹಸ್ಯಗಳನ್ನು
ಆತನು ಪ್ರಕಟಿಸುವನು; ಮರಣಾಂಧಕಾರದ ಸ್ಥಳ
ಗಳನ್ನು ಬೆಳಕಿನಿಂದ ಪ್ರಕಾಶಗೊಳಿಸುವನು.
23 ದೇವರು ಜನಾಂಗಗಳನ್ನು ವೃದ್ಧಿಮಾಡಿ ಬಲ
ಗೊಳಿಸುವನು; ಬಳಿಕ ಅವುಗಳನ್ನು ನಾಶ ಮಾಡು
ವನು. ಆತನು ಜನಾಂಗಗಳನ್ನು ವಿಸ್ತಾರವಾಗಿ
ಬೆಳೆಯ ಮಾಡುವನು; ನಂತರ ಅವುಗಳನ್ನು
ಚದರಿಸಿಬಿಡುವನು.
24 ದೇವರು ಭೂಲೋಕದ ನಾಯಕರುಗಳನ್ನು
ಮೂಢರನ್ನಾಗಿ ಮಾಡುವನು; ರಸ್ತೆಯಿಲ್ಲದ
ಮರಳುಗಾಡಿನಲ್ಲಿ ಅವರನ್ನು ಅಲೆದಾಡಿಸುವನು.
25 ಅವರು ಬೆಳಕಿಲ್ಲದೆ ಕತ್ತಲೆಯಲ್ಲಿ ತಡವಾಡುವರು.
ಆತನು ಅವರನ್ನು ಅಮಲೇರಿದವರಂತೆ ಅಲೆ
ದಾಡಿಸುವನು.''

13 ಯೋಬನು ಹೇಳಿದನು: ''ಇಗೋ, ಇವುಗಳ
ನ್ನೆಲ್ಲ ನನ್ನ ಕಣ್ಣುಗಳು ಕಂಡಿವೆ; ಕಿವಿಗಳು ಕೇಳಿ
ಗ್ರಹಿಸಿಕೊಂಡಿವೆ. 2 ನಿಮಗೆ ತಿಳಿದಿರುವುದು ನನಗೂ
ತಿಳಿದಿದೆ. ನಾನು ನಿಮಗಿಂತ ಕಡಿಮೆಯಲ್ಲ. 3 ಆದರೆ
ನಾನು ನಿಮ್ಮೊಂದಿಗೆ ವಾದಮಾಡದೆ ಸರ್ವಶಕ್ತನಾದ
ದೇವರೊಂದಿಗೆ ಮಾತಾಡುವೆನು; ನನ್ನ ಕಷ್ಟಗಳ ಕುರಿತು
ಆತನೊಂದಿಗೆ ವಾದಿಸುವೆನು.
4 ನೀವಾದರೋ ನಿಮ್ಮ ಆ ಜ್ಞಾನವನ್ನು ಸುಳ್ಳುಗಳಿಂದ
ಮುಚ್ಚಲು ಪ್ರಯತ್ನಿಸುತ್ತಿದ್ದೀರಿ. ನೀವೆಲ್ಲರೂ ಗುಣಪಡಿಸ
ಲಾಗದ ವೈದ್ಯರುಗಳಂತಿದ್ದೀರಿ.
5 ನೀವು ಬಾಯಿಮುಚ್ಚಿಕೊಂಡು ಸುಮ್ಮನಿದ್ದರೆ ಎಷ್ಟೋ
ಒಳ್ಳೆಯದು. ನೀವು ಮಾಡಬಹುದಾದ ಜ್ಞಾನದ ಕಾರ್ಯ
ಅದೊಂದೇ.

6 ''ಈಗ ನನ್ನ ವಾದಕ್ಕೆ ಕಿವಿಗೊಡಿ. ನಾನು ಹೇಳು
ವುದನ್ನು ಕೇಳಿ.
7 ನೀವು ದೇವರಿಗಾಗಿ ಸುಳ್ಳಾಡುವಿರಾ? ಆತನಿಗಾಗಿ
ಅನ್ಯಾಯದ ವಾದಗಳನ್ನು ಬಳಸುವಿರಾ?
8 ನೀವು ದೇವರಿಗೆ ಮುಖದಾಕ್ಷಿಣ್ಯವನ್ನು ತೋರಿಸು
ವಿರಾ? ನ್ಯಾಯಾಲಯದಲ್ಲಿ ಆತನಿಗಾಗಿ ವಾದಿ
ಸಲು ಹೋಗುವಿರಾ?
9 ದೇವರು ನಿಮ್ಮನ್ನು ಸೂಕ್ಷ್ಮವಾಗಿ ಪರಿಶೋಧಿ
ಸಿದರೆ ನೀವು ನೀತಿವಂತರಾಗಿ ಕಂಡು ಬರು
ವಿರಾ? ಜನರಿಗೆ ಮೋಸಮಾಡುವಂತೆ ದೇವ
ರಿಗೂ ಮೋಸ ಮಾಡಬಹುದೆಂದು ಯೋಚಿಸಿ
ಕೊಂಡಿದ್ದೀರಾ?
10 ನೀವು ನ್ಯಾಯಾಲಯದಲ್ಲಿ ರಹಸ್ಯವಾಗಿ ಪಕ್ಷಪಾತ
ಮಾಡಿದರೆ ಆತನು ನಿಮ್ಮನ್ನು ಖಂಡಿಸೇ ಖಂಡಿ
ಸುವನು.
11 ಆತನ ಪ್ರಕಾಶಮಾನವಾದ ಮಹಿಮೆಯು ನಿಮ್ಮನ್ನು
ಹೆದರಿಸುವುದಿಲ್ಲವೇ? ನೀವು ಆತನಿಗೆ ಭಯಪಡು
ವುದಿಲ್ಲವೇ?
12 ನೀವಾಡುವ ಸ್ಮರಣೀಯ ನುಡಿಗಳು ಬೂದಿಗೆ
ಸಮಾನವಾಗಿವೆ. ನಿಮ್ಮ ವಾದಗಳು ಮಣ್ಣಿನಷ್ಟೇ ಬಲ
ಹೀನವಾಗಿವೆ.
13 ''ಸುಮ್ಮನಿರಿ, ಮಾತಾಡಲು ನನಗೆ ಅವಕಾಶಕೊಡಿ!
ನನಗೆ ಏನಾಗಬೇಕೋ ಆಗಲಿ.
14 ನಾನು ನನ್ನನ್ನು ಅಪಾಯಕ್ಕೊಡ್ಡುವೆನು; ನನ್ನ ಜೀವ
ವನ್ನು ಕೈಯಲ್ಲಿ ಹಿಡಿದುಕೊಂಡಿರುವೆನು.
15 ದೇವರು ನನ್ನನ್ನು ಕೊಂದರೂ ಆತನಲ್ಲಿಯೇ
ಭರವಸವಿಟ್ಟಿರುವೆನು. ನನ್ನ ನಡತೆಯ ಕುರಿತು
ಆತನ ಮುಂದೆ ವಾದಿಸುವೆನು.
16 ನಾನು ನಿರಪರಾಧಿಯೆಂದು ಆಗ ರುಜುವಾತಾಗು
ವುದು. ಯಾಕಂದರೆ, ದೇವರನ್ನು ಮುಖಾಮುಖಿ
ಯಾಗಿ ಸಂಧಿಸಲು ದುಷ್ಟನಿಗೆ ಸಾಧ್ಯವೇ ಇಲ್ಲ.
17 ನಾನು ಹೇಳುವುದನ್ನು ಗಮನವಿಟ್ಟು ಕೇಳಿ. ನನ್ನ
ವಿವರಣೆಯನ್ನು ನಿಮ್ಮ ಕಿವಿಗಳು ಕೇಳಲಿ.
18 ನನ್ನ ಪರವಾಗಿ ವಾದಿಸಲು ಈಗ ಸಿದ್ಧವಾಗಿದ್ದೇನೆ.
ನಾನು ನಿರಪರಾಧಿಯೆಂದು ನನಗೆ ಗೊತ್ತದೆ.

---

**ಅಧಿಪತಿಗಳ … ತೆಗೆದುಹಾಕುವನು** ಅಕ್ಷರಶಃ, ''ಆತನು ಅಧಿಪತಿಗಳ ನಡುಕಟ್ಟನ್ನು ಬಿಚ್ಚಿಹಾಕುವನು.''

19 ನಾನು ತಪ್ಪಿತಸ್ಥನೆಂದು ಯಾವನೂ ನಿರೂಪಿಸಲಾ
ರನು. ನಿರೂಪಿಸಿ ಬಲ್ಲವನಿದ್ದರೆ ಬಾಯಿಮುಚ್ಚಿ
ಕೊಳ್ಳುವೆನು.
20 ''ದೇವರೇ, ನನಗಾಗಿ ಎರಡು ಕಾರ್ಯಗಳನ್ನು
ಮಾಡು, ಆಗ ನನ್ನನ್ನು ನಿನಗೆ ಮರೆಮಾಡಿ
ಕೊಳ್ಳುವುದಿಲ್ಲ.
21 ಮೇಲೆತ್ತಿರುವ ನಿನ್ನ ಕೈಯಿಂದ ನನ್ನನ್ನು ದಂಡಿಸ
ಬೇಡ, ಭಯಾನಕವಾದವುಗಳಿಂದ ನನ್ನನ್ನು
ಹೆದರಿಸಬೇಡ.
22 ಆಗ ನೀನು ಕರೆದರೆ, ನಾನು ಉತ್ತರಕೊಡುವೆನು.
ಇಲ್ಲವೇ ನಾನು ಕರೆಯುವೆ, ನೀನು ಉತ್ತರಕೊಡು.
23 ನಾನು ಎಷ್ಟು ಪಾಪಗಳನ್ನು ಮಾಡಿರುವೆ? ನಾನೇನು
ತಪ್ಪುಮಾಡಿರುವೆ? ನನ್ನ ತಪ್ಪನ್ನೂ ಪಾಪವನ್ನೂ
ನನಗೆ ತೋರಿಸು.
24 ದೇವರೇ, ನೀನೇಕೆ ನನಗೆ ಮರೆಯಾಗಿರುವೆ?
ನನ್ನನ್ನೇಕೆ ನಿನ್ನ ಶತ್ರುವೆಂದು ಪರಿಗಣಿಸಿರುವೆ?
25 ಒಣಗಿದ ಎಲೆಯಂತಿರುವ ನನ್ನನ್ನು ಹೆದರಿಸು
ವಿಯಾ? ಹುಲ್ಲುಕಡ್ಡಿಯಂತಿರುವ ನನ್ನ ಮೇಲೆ
ಆಕ್ರಮಣ ಮಾಡುವಿಯಾ?
26 ದೇವರೇ, ನೀನು ನನಗೆ ಕಠಿಣವಾದ ದಂಡನೆ
ಗಳನ್ನು ವಿಧಿಸಿರುವೆ. ನನ್ನ ಯೌವನದ ಪಾಪಗಳ
ದೆಸೆಯಿಂದ ನನ್ನನ್ನು ಸಂಕಟಪಡಿಸಿರುವೆ.
27 ನೀನು ನನ್ನ ಕಾಲುಗಳಿಗೆ ಕೋಳವನ್ನು ಹಾಕಿರುವೆ.
ನಾನಿಡುವ ಪ್ರತಿಯೊಂದು ಹೆಜ್ಜೆಯನ್ನು ನೀನು
ಸೂಕ್ಷ್ಮವಾಗಿ ಗಮನಿಸಿ ನನ್ನ ಹೆಜ್ಜೆಗಳಿಗೆ ಮೇರೆ
ಗಳನ್ನು ಹಾಕಿರುವೆ.
28 ಆದ್ದರಿಂದ ನಾನು ಕೊಳೆತುಹೋದ ಪದಾರ್ಥ
ದಂತೆಯೂ ನುಸಿಹಿಡಿದ ಬಟ್ಟೆಯ ಚೂರಿ
ನಂತೆಯೂ ಹಾಳಾಗುತ್ತಿದ್ದೇನೆ.''

14 ಯೋಬನು ಹೇಳಿದನು: ''ನಾವು ಮನುಷ್ಯ
ರಷ್ಟೇ. ನಮ್ಮ ಅಲ್ಪ ಜೀವಿತವು ಕಷ್ಟಗಳಿಂದ
ತುಂಬಿಕೊಂಡಿದೆ. 2ಮನುಷ್ಯನ ಜೀವಿತವು ಹೂವಿನಂತೆ
ಬೇಗನೆ ಬೆಳೆದು ಒಣಗಿಹೋಗುವುದು. ಮನುಷ್ಯನ
ಜೀವಿತವು ನೆರಳಿನಂತೆ ಕ್ಷಣಿಕವಾದದ್ದು. 3ದೇವರೇ,
ಇಂಥವನಾದ ನನ್ನ ಮೇಲೆ ಕಣ್ಣಿಟ್ಟು ನ್ಯಾಯಾಲಯಕ್ಕೆ
ಎಳೆದುಕೊಂಡು ಹೋಗುವಿಯಾ?

4 ''ಅಶುದ್ಧದಿಂದ ಶುದ್ಧವು ಉಂಟಾದೀತೇ?
ಎಂದಿಗೂ ಇಲ್ಲ.
5 ಮನುಷ್ಯನ ದಿನಗಳು ಇಷ್ಟೇ ಎಂದು ನಿರ್ಣಯ
ವಾಗಿದೆ; ಅವನ ತಿಂಗಳುಗಳನ್ನು ನೀನು ನಿರ್ಣಯಿ
ಸಿರುವೆ; ಅವನ ಆಯುಷ್ಯಕ್ಕೆ ದಾಟಲಾರದ ಮೇರೆ
ಯನ್ನು ಹಾಕಿರುವೆ.
6 ದೇವರೇ, ನಿನ್ನ ದೃಷ್ಟಿಯನ್ನು ಮನುಷ್ಯನ ಕಡೆ
ಯಿಂದ ತಿರುಗಿಸು. ಅವನನ್ನು ಅವನ ಪಾಡಿಗೆ
ಬಿಟ್ಟುಬಿಡು. ಅವನು ಕೂಲಿಯವನಂತಾದರೂ
ಜೀವಿಸಲಿ.
7 ''ಮರಕ್ಕೆ ನಿರೀಕ್ಷೆಯಿದೆ. ಕಡಿದುಹಾಕಲ್ಪಟ್ಟರೂ
ಅದು ಮತ್ತೆ ಚಿಗುರಬಹುದು; ಹೊಸಕವಲುಗಳನ್ನು
ಮೊಳೆಯಿಸುತ್ತಲೇ ಇರುವುದು.
8 ಅದರ ಬೇರುಗಳು ನೆಲದೊಳಗೆ ಮುದಿಯಾದರೂ
ಅದರ ಬುಡವು ನೆಲದಲ್ಲಿ ಸತ್ತುಹೋದರೂ
9 ಅದು ನೀರಿನಿಂದ ಮತ್ತೆ ಹೊಸದಾಗಿ ಬೆಳೆಯು
ವುದು; ಎಳೆಗಿಡದಂತೆ ಕವಲೊಡೆಯುವುದು.
10 ಮನುಷ್ಯನಾದರೋ ಸತ್ತು ಕೊನೆಗೊಳ್ಳುವನು.
ಪ್ರಾಣಹೋದಾಗ ಇಲ್ಲವಾಗುವನು.
11 ಸಮುದ್ರದಿಂದ ನೀರು ಕಾಣೆಯಾಗುವವರೆಗೂ
ನದಿಯ ನೀರು ಒಣಗಿ ಹೋಗುವವರೆಗೂ
12 ಸತ್ತಮನುಷ್ಯನು ಮಲಗಿಕೊಂಡೇ ಇರುವನು.
ಅವನು ಮತ್ತೆ ಮೇಲೇಳುವುದಿಲ್ಲ. ಆಕಾಶವು
ಅಳಿದುಹೋಗುವವರೆಗೆ ಅವನು ನಿದ್ರೆಯಿಂದ
ಎಬ್ಬಿಸಲ್ಪಡುವುದಿಲ್ಲ.
13 ''ನಿನ್ನ ಕೋಪವು ಇಳಿಯುವ ತನಕ ನನ್ನನ್ನು ಪಾತಾ
ಳದಲ್ಲಿ ಬಚ್ಚಿಟ್ಟಿದ್ದು ನೀನು ಗೊತ್ತುಪಡಿಸಿದ
ಸಮಯದಲ್ಲಿ ನನ್ನನ್ನು ಜ್ಞಾಪಿಸಿಕೊಂಡಿದ್ದರೆ
ಎಷ್ಟೋ ಒಳ್ಳೆಯದಾಗುತ್ತಿತ್ತು.
14 ಸತ್ತ ಮನುಷ್ಯನು ಮತ್ತೆ ಬದುಕುವನೇ? ಬದುಕು
ವುದಾಗಿದ್ದರೆ, ನನಗೆ ಬಿಡುಗಡೆಯಾಗುವ ತನಕ
ನನ್ನ ಎಲ್ಲಾ ಕಷ್ಟದ ದಿನಗಳಲ್ಲಿಯೂ ಕಾದು
ಕೊಂಡಿರುವೆ.
15 ದೇವರೇ, ನೀನು ನನ್ನನ್ನು ಕರೆದರೆ, ಉತ್ತರ
ಕೊಡುವೆನು. ಆಗ ನಿನ್ನ ಸೃಷ್ಟಿಯಾದ ನನ್ನನ್ನು ನೀನು
ಇಷ್ಟಪಡುವೆ.
16 ನಾನಿಡುವ ಪ್ರತಿ ಹೆಜ್ಜೆಯನ್ನೂ ನೀನು ಗಮನಿಸುವೆ.
ಆದರೆ ನನ್ನ ಪಾಪಕ್ಕಾಗಿ ನೀನು ದೃಷ್ಟಿಸಿ ನೋಡು
ವುದಿಲ್ಲ.
17 ನನ್ನ ಪಾಪಗಳನ್ನು ಚೀಲದಲ್ಲಿಟ್ಟು ಮುದ್ರಿಸಿ
ದೂರಕ್ಕೆ ಎಸೆದುಬಿಡುವೆ.
18 ''ಪರ್ವತವು ಬಿದ್ದು ಕರಗಿ ಹೋಗುವಂತೆ ಬಂಡೆಯು
ತನ್ನ ಸ್ಥಳದಿಂದ ಚಲಿಸುವುದು.
19 ಹರಿಯುವ ನೀರು ಕಲ್ಲುಗಳನ್ನು ಸವೆಯಿಸು
ವಂತೆಯೂ ನೆಲದ ಮೇಲಿನ ಧೂಳನ್ನು ನೀರು
ಕೊಚ್ಚಿಕೊಂಡು ಹೋಗುವಂತೆಯೂ ದೇವರೇ,

ನೀನು ಮನುಷ್ಯನ ನಿರೀಕ್ಷೆಯನ್ನು ನಾಶ
ಮಾಡುವೆ.
20 ನೀನು ಮನುಷ್ಯನನ್ನು ಶಾಶ್ವತವಾಗಿ ಸೋಲಿಸಿ
ಬಿಡುವೆ. ಆಗ ಮನುಷ್ಯನು ಇಲ್ಲವಾಗುವನು. ನೀನು
ಅವನ ಮುಖವನ್ನು ವಿಕಾರಗೊಳಿಸಿ ಶಾಶ್ವತವಾಗಿ
ಕಳುಹಿಸಿಬಿಡುವೆ.
21 ಅವನ ಮಕ್ಕಳಿಗೆ ಸನ್ಮಾನವಾದರೂ ಅವನಿಗೆ ತಿಳಿ
ಯುವುದಿಲ್ಲ; ಅವರಿಗೆ ಅವಮಾನವಾದರೂ ಅವ
ನಿಗೆ ಅದರ ಅರಿವೇ ಇರುವುದಿಲ್ಲ.
22 ಅವನು ತನ್ನ ದೇಹದಲ್ಲಿ ನೋವನ್ನೇ ಅನುಭವಿ
ಸುತ್ತಾ ತನಗೋಸ್ಕರ ಗೋಳಾಡುವನು.''

## ಯೋಬನಿಗೆ ಎಲೀಫಜನ ಉತ್ತರ

15 ಬಳಿಕ ತೇಮಾನಿನ ಎಲೀಫಜನು ಯೋಬ
ನಿಗೆ ಉತ್ತರಿಸಿದನು:
2 ''ಯೋಬನೇ, ನೀನು ನಿಜವಾಗಿಯೂ ಜ್ಞಾನಿಯಾಗಿ
ದ್ದರೆ, ಬರಿದಾದ ನಿನ್ನ ವೈಯಕ್ತಿಕ ಮಾತುಗಳಿಂದ
ಉತ್ತರಿಸುವುದಿಲ್ಲ. ಜ್ಞಾನಿಯೂ ಬಿಸಿಗಾಳಿಯಂತೆ
ಉತ್ತರಿಸುವನೇ?
3 ಜ್ಞಾನಿಯು ನಿಷ್ಪ್ರಯೋಜಕವಾದ ಮಾತುಗಳಿಂದ
ವಾದಿಸುತ್ತಾನೆಂದು ಭಾವಿಸಿಕೊಂಡಿರುವೆಯಾ?
4 ನೀನು ನಿನ್ನ ಮಾರ್ಗದಲ್ಲಿ ಹೋಗುವುದಾದರೆ,
ದೇವರಲ್ಲಿ ಯಾರೂ ಭಯಭಕ್ತಿಯಿಡುವುದಿಲ್ಲ;
ಆತನಿಗೆ ಯಾರೂ ಪ್ರಾರ್ಥಿಸುವುದಿಲ್ಲ.
5 ನಿನ್ನ ಪಾಪವೇ ನಿನ್ನ ಮಾತುಗಳಿಗೆ ಪ್ರೇರಕವಾಗಿವೆ.
ನೀನು ಮೋಸಕರವಾದ ಮಾತುಗಳನ್ನು ಬಳಸು
ತ್ತಿರುವೆ.
6 ನೀನು ತಪ್ಪಿತಸ್ಥನೆಂದು ನಾನು ನಿರೂಪಿಸುವ ಅಗತ್ಯ
ವಿಲ್ಲ. ಯಾಕಂದರೆ ನಿನ್ನ ಬಾಯ ಮಾತುಗಳೇ
ನಿನ್ನನ್ನು ತಪ್ಪಿತಸ್ಥನೆಂದು ತೋರಿಸುತ್ತವೆ. ನಿನ್ನ ಸ್ವಂತ
ತುಟಿಗಳೇ ನಿನಗೆ ವಿರೋಧವಾಗಿ ಮಾತಾಡುತ್ತವೆ.
7 ''ಯೋಬನೇ, ಎಲ್ಲರಿಗಿಂತ ಮೊದಲು ನೀನೇ ಹುಟ್ಟಿ
ರುವುದಾಗಿ ಭಾವಿಸಿಕೊಂಡಿರುವಿಯಾ? ಬೆಟ್ಟಗಳಿ
ಗಿಂತ ಮೊದಲೇ ನೀನು ಸೃಷ್ಟಿಗೊಂಡೆಯಾ?
8 ದೇವರ ರಹಸ್ಯ ಯೋಜನೆಗಳನ್ನು ಆಲಿಸಿರು
ವೆಯಾ? ನೀನೊಬ್ಬನೇ ಜ್ಞಾನಿಯೆಂದು ಭಾವಿಸಿ
ಕೊಂಡಿರುವಿಯಾ?
9 ಯೋಬನೇ, ನಿನಗೆ ಗೊತ್ತಿರುವುದೆಲ್ಲಾ ನಮಗೂ
ಗೊತ್ತಿದೆ. ನಿನಗೆ ಅರ್ಥವಾಗುವುದೆಲ್ಲಾ ನಮಗೂ
ಅರ್ಥವಾಗುತ್ತದೆ.
10 ನಿನ್ನ ತಂದೆಗಿಂತಲೂ ವಯಸ್ಸಾಗಿರುವ, ಕೂದಲು
ಬೆಳ್ಳಗಾಗಿರುವ ವೃದ್ಧನು ನಮ್ಮಲ್ಲಿದ್ದಾನೆ.
11 ದೇವರ ಆದರಣೆಯ ಮಾತುಗಳೂ ನಮ್ಮ ನಯ
ವಾದ ಮಾತುಗಳೂ ನಿನಗೆ ಸಾಲುವುದಿಲ್ಲವೇ?
12 ಯೋಬನೇ, ನಿನ್ನ ಆಲೋಚನೆಗಳು ನಿನ್ನನ್ನು
ಕೊಂಡೊಯ್ದದ್ದೇಕೆ? ನಿನ್ನ ಕಣ್ಣುಗಳು ನಮ್ಮ
ಮೇಲೆ ಕಿಡಿಕಿಡಿಯಾಗುವುದೇಕೆ?
13 ನೀನು ದೇವರ ಮೇಲೆ ಕೋಪಗೊಂಡು ನಿನ್ನ
ಬಾಯಿಂದ ಅಂತಹ ಮಾತುಗಳನ್ನು ಸುರಿಸು
ತ್ತಿರುವೆ!
14 ''ಮನುಷ್ಯನು ಎಷ್ಟರವನು? ಅವನು ಪರಿಶುದ್ಧ
ನಾಗಿರಲು ಸಾಧ್ಯವೇ? ಸ್ತ್ರೀಯಲ್ಲಿ ಹುಟ್ಟಿದವನು
ನೀತಿವಂತನಾಗಿರಲು ಸಾಧ್ಯವೇ?
15 ದೇವರು ತನ್ನ ದೂತರುಗಳನ್ನು* ಸಹ ನಂಬುವು
ದಿಲ್ಲ. ಆತನ ದೃಷ್ಟಿಯಲ್ಲಿ ಆಕಾಶಗಳು ಸಹ ಅಶುದ್ಧ
ವಾಗಿವೆ.
16 ಹೀಗಿರಲು ದುಷ್ಟತನವನ್ನು ನೀರಿನಂತೆ ಕುಡಿ
ಯುತ್ತಾ ಅಸಹ್ಯನೂ ಕೆಟ್ಟವನೂ ಆಗಿರುವ ಮನು
ಷ್ಯನು ಎಷ್ಟೋ ಅಶುದ್ಧನಲ್ಲವೇ?
17 ''ಯೋಬನೇ, ನನಗೆ ಕಿವಿಗೊಡು, ಆಗ ನಾನು ನಿನಗೆ
ಅದನ್ನು ವಿವರಿಸುವೆನು. ನಾನು ನೋಡಿರುವು
ದನ್ನೇ ನಿನಗೆ ತಿಳಿಸುವೆನು.
18 ಜ್ಞಾನಿಗಳು ನನಗೆ ತಿಳಿಸಿದ ಸಂಗತಿಗಳನ್ನು ನಾನು
ನಿನಗೆ ಹೇಳುವೆನು. ಆ ಜ್ಞಾನಿಗಳಿಗೆ ಅವರ ಪೂರ್ವಿ
ಕರೇ ಈ ಸಂಗತಿಗಳನ್ನು ತಿಳಿಸಿದ್ದಾರೆ. ಅವರು ಯಾವ
ರಹಸ್ಯಗಳನ್ನೂ ನನಗೆ ಮರೆಮಾಡಲಿಲ್ಲ.
19 ಅವರು ಮಾತ್ರ ತಮ್ಮ ದೇಶದಲ್ಲಿ ವಾಸಿಸಿದರು.
ಅವರ ಮಧ್ಯದಲ್ಲಿ ಯಾವ ವಿದೇಶಿಯನೂ ಹಾದು
ಹೋಗುತ್ತಿರಲಿಲ್ಲ.
20 ದುಷ್ಟನು ತನ್ನ ಜೀವಮಾನವೆಲ್ಲಾ ಯಾತನೆಯನ್ನು
ಅನುಭವಿಸುವನು. ಕ್ರೂರಿಯು ತನಗೆ ನೇಮಕ
ಗೊಂಡಿರುವ ವರ್ಷಗಳಲ್ಲೆಲ್ಲಾ ಕಷ್ಟಪಡುವನು.
21 ಭೀಕರವಾದ ಶಬ್ದಗಳು ಅವನ ಕಿವಿಗಳಲ್ಲೇ ಇರು
ತ್ತವೆ. ತಾನು ಸುರಕ್ಷಿತನಾಗಿರುವುದಾಗಿ ಅವನು
ಯೋಚಿಸುವಾಗಲೇ ವೈರಿಯು ಅವನ ಮೇಲೆ
ಆಕ್ರಮಣಮಾಡುವನು.
22 ದುಷ್ಟನಿಗೆ ಕತ್ತಲೆಯಿಂದ ಪಾರಾಗುತ್ತೇನೆ ಎಂಬ
ನಿರೀಕ್ಷೆಯೇ ಇಲ್ಲ. ಅವನನ್ನು ಕೊಲ್ಲಲು ಕತ್ತಿಯು
ಎಲ್ಲೋ ಕಾದುಕೊಂಡಿದೆ.
23 ಅವನು ಅತ್ತಿತ್ತ ಅಲೆದಾಡುವನು; ಅವನ ದೇಹವು
ರಣಹದ್ದುಗಳಿಗೆ ಆಹಾರವಾಗುವುದು. ಮರ
ಣವು* ತನಗೆ ಬಹು ಸಮೀಪವಾಗಿರುವುದು ಅವ
ನಿಗೆ ಗೊತ್ತೇ ಇದೆ.

---

**ದೇವದೂತರು** ಅಕ್ಷರಶಃ, ''ಪರಿಶುದ್ಧರು.''

**ಮರಣವು** ಅಕ್ಷರಶಃ ''ಕತ್ತಲೆಯ ದಿನ.''

24 ಚಿಂತೆ ಸಂಕಟಗಳು ಅವನನ್ನು ಭಯಗೊಳಿಸುತ್ತವೆ.
ಅವನನ್ನು ನಾಶಮಾಡಲು ಸಿದ್ಧನಾಗಿರುವ ರಾಜ
ನಂತೆ ಅವು ಅವನ ಮೇಲೆ ಆಕ್ರಮಣಮಾಡುತ್ತವೆ.
25 ಯಾಕಂದರೆ ದುಷ್ಟನು ದೇವರಿಗೆ ವಿರುದ್ಧವಾಗಿ ತನ್ನ
ಕೈಯನ್ನು ಝುಳಪಿಸುತ್ತಾನೆ. ದುಷ್ಟನು ಸರ್ವಶಕ್ತ
ನಾದ ದೇವರ ವಿರುದ್ಧವಾಗಿ ಮಹಾಶೂರನಂತೆ
ಆಕ್ರಮಣ ಮಾಡುವನು.
26 ಅವನು ಬಹು ಮೊಂಡನಾಗಿದ್ದಾನೆ. ದುಷ್ಟನು
ಮಹಾಗುರಾಣಿಯನ್ನು ಹಿಡಿದು ದೇವರನ್ನು ಎದು
ರಿಸಲು ಪ್ರಯತ್ನಿಸುವನು.
27 ''ದುಷ್ಟನ ಮುಖದಲ್ಲಿ ಕೊಬ್ಬೇರಿದೆ. ಅವನ
ಸೊಂಟದಲ್ಲಿ ಬೊಜ್ಜು ಬೆಳೆದುಕೊಂಡಿದೆ.
28 ಪಾಳುಬಿದ್ದಿರುವ ಮನೆಗಳಲ್ಲಿ ದುಷ್ಟನು ವಾಸಿಸು
ವನು ಹಾಳುದಿಬ್ಬಗಳಾಗಬೇಕೆಂಬುದೇ ಆ ಮನೆಗಳ
ಗತಿಯಾಗಿದೆ.
29 ದುಷ್ಟನು ಬಹುಕಾಲದವರೆಗೆ ಐಶ್ವರ್ಯವಂತನಾಗಿ
ರಲು ಸಾಧ್ಯವಿಲ್ಲ. ಅವನ ಐಶ್ವರ್ಯವು ಶಾಶ್ವತವಲ್ಲ;
ಅವನ ಆಸ್ತಿಗಳು ದೇಶದಲ್ಲಿ ವೃದ್ಧಿಯಾಗುವುದಿಲ್ಲ.
30 ದುಷ್ಟನು ಕತ್ತಲೆಯೊಳಗಿಂದ ತಪ್ಪಿಸಿಕೊಳ್ಳುವುದಿಲ್ಲ.
ಬೆಂಕಿಯಿಂದ ಸುಟ್ಟುಹೋದ ಕೊಂಬೆಗಳನ್ನು
ಹೊಂದಿರುವ ಮರದಂತೆ ಅವನಿರುವನು. ದೇವರ
ಉಸಿರು ದುಷ್ಟನನ್ನು ಬಡಿದುಕೊಂಡು ಹೋಗು
ವುದು.
31 ದುಷ್ಟನು ಅಯೋಗ್ಯವಾದವುಗಳ ಮೇಲೆ ನಂಬಿಕೆ
ಯಿಟ್ಟು, ತನ್ನನ್ನು ತಾನೇ ಮೋಸಮಾಡಿಕೊಳ್ಳ
ದಿರಲಿ. ಯಾಕಂದರೆ ಅದಕ್ಕೆ ಪ್ರತಿಫಲವಾಗಿ ಅವ
ನಿಗೇನೂ ದೊರೆಯುವುದಿಲ್ಲ.
32 ದುಷ್ಟನು ತನ್ನ ಜೀವಿತ ಮುಗಿಯುವುದಕ್ಕಿಂತ
ಮೊದಲೇ ಮುದುಕನಾಗುವನು; ಒಣಗಿಹೋಗಿ
ಇನ್ನೆಂದಿಗೂ ಹಸುರಾಗದ ಬಳ್ಳಿಯಂತಾಗುವನು;
33 ಮಾಗುವುದಕ್ಕಿಂತ ಮೊದಲೇ ತನ್ನ ದ್ರಾಕ್ಷಿಯನ್ನು
ಕಳೆದುಕೊಳ್ಳುವ ದ್ರಾಕ್ಷಿ ಬಳ್ಳಿಯಂತಿರುವನು;
ಹೂವುಗಳು ಉದುರಿ ಹೋದ ಆಲಿವ್ ಮರ
ದಂತಿರುವನು.
34 ಯಾಕಂದರೆ ದೇವರಿಲ್ಲದ ಜನರು ಫಲ ಕೊಡ
ಲಾರರು. ಲಂಚಕೋರರ ಗುಡಾರಗಳು ಬೆಂಕಿ
ಯಿಂದ ಸುಟ್ಟುಹೋಗುತ್ತವೆ.
35 ಅವರು ಗರ್ಭಧರಿಸಿ ಕೇಡುಕನ್ನೇ ಹೆರುವರು. ಅವರ
ಗರ್ಭದಲ್ಲಿರುವ ಮಗುವು ಮೋಸಕರವಾದದ್ದು.''

### ಎಲೀಫಜನಿಗೆ ಯೋಬನ ಉತ್ತರ

16 ಆಗ ಯೋಬನು ಹೀಗೆ ಉತ್ತರಿಸಿದನು:
2 ''ನಾನು ಈ ಸಂಗತಿಗಳನ್ನು ಮೊದಲೇ
ಕೇಳಿದ್ದೇನೆ, ನೀವೆಲ್ಲರೂ ಕೀಟಲೆ ಮಾಡುವವರೇ
ಹೊರತು ಸಂತೈಸುವವರಲ್ಲ.
3 ನಿಮ್ಮ ಒಣ ಮಾತುಗಳಿಗೆ ಕೊನೆಯಿಲ್ಲವೇ? ನೀವು
ವಾದಮಾಡುತ್ತಲೇ ಇರುವುದೇಕೆ?
4 ನಿಮಗೆ ನನ್ನ ಸ್ಥಿತಿಯು ಬಂದಿದ್ದರೆ ನೀವು ಹೇಳಿ
ದ್ದನ್ನೇ ನಾನು ಹೇಳಬಹುದಾಗಿತ್ತು. ನಿಮಗೆ ವಿರುದ್ಧ
ವಾಗಿ ಜ್ಞಾನದ ಮಾತುಗಳನ್ನು ಹೇಳಿ ನಿಮ್ಮ ವಿಷಯ
ದಲ್ಲಿ ತಲೆಯಾಡಿಸಬಹುದಾಗಿತ್ತು.
5 ಆದರೆ ನಾನು ನಿಮ್ಮನ್ನು ನನ್ನ ಮಾತುಗಳಿಂದ
ಪ್ರೋತ್ಸಾಹಿಸಿ ನಿಮ್ಮಲ್ಲಿ ನಿರೀಕ್ಷೆಯನ್ನು ಹುಟ್ಟಿಸ
ಬಹುದಾಗಿತ್ತು.
6 ''ಆದರೆ ನನ್ನ ಯಾವ ಮಾತೂ ನನ್ನ ನೋವನ್ನು
ನಿವಾರಣೆ ಮಾಡಲಾರದು; ಮೌನವಾಗಿದ್ದರೂ
ಅದರಿಂದ ಪ್ರಯೋಜನವೇನೂ ಇಲ್ಲ.
7 ದೇವರೇ, ನೀನು ನನ್ನನ್ನು ನಿಶ್ಶಕ್ತನನ್ನಾಗಿ ಮಾಡಿ
ರುವೆ. ನನ್ನ ಇಡೀ ಕುಟುಂಬವನ್ನು ನಾಶ
ಮಾಡಿರುವೆ.
8 ನೀನು ನನ್ನನ್ನು ಮುದುಡಿಹಾಕಿರುವುದು ಎಲ್ಲ
ರಿಗೂ ಕಾಣುತ್ತಿದೆ. ನನ್ನ ದೇಹ ರೋಗಗ್ರಸ್ತ
ವಾಗಿದೆ; ನಾನು ವಿಕಾರವಾಗಿ ಕಾಣುತ್ತಿರುವೆ.
ಜನರು ನನ್ನನ್ನು ಅಪರಾಧಿಯೆಂದು ಭಾವಿಸಿ
ಕೊಂಡಿದ್ದಾರೆ.
9 ''ದೇವರು ಕೋಪದಿಂದ ನನ್ನ ದೇಹವನ್ನು ಸೀಳಿ
ಹಾಕುತ್ತಿದ್ದಾನೆ. ಆತನು ನನ್ನ ಮೇಲೆ ಹಲ್ಲು
ಕಡಿಯುತ್ತಿದ್ದಾನೆ. ನನ್ನ ಶತ್ರುವು ದ್ವೇಷದಿಂದ
ನನ್ನನ್ನು ನೋಡುತ್ತಿದ್ದಾನೆ.
10 ಜನರು ನನ್ನ ಸುತ್ತಲೂ ಗುಂಪುಕೂಡಿದ್ದಾರೆ;
ಅವರು ನನ್ನ ಮುಖಕ್ಕೆ ಹೊಡೆದು ಗೇಲಿ
ಮಾಡುತ್ತಿದ್ದಾರೆ.
11 ದೇವರು ನನ್ನನ್ನು ದುಷ್ಟರಿಗೆ ಕೊಟ್ಟುಬಿಟ್ಟಿದ್ದಾನೆ.
ನನಗೆ ಕೇಡು ಮಾಡಲು ಕೇಡುಕರಿಗೆ ಬಿಟ್ಟು
ಕೊಟ್ಟಿದ್ದಾನೆ.
12 ನಾನು ಸುಖದಿಂದಿದ್ದಾಗ ದೇವರು ನನ್ನನ್ನು ಜಜ್ಜಿ
ಹಾಕಿದನು; ನನ್ನ ಕತ್ತು ಹಿಡಿದು ನನ್ನನ್ನು ಚೂರು
ಚೂರು ಮಾಡಿದನು! ದೇವರು ನನ್ನನ್ನು ತನ್ನ ಗುರಿ
ಅಭ್ಯಾಸಕ್ಕಾಗಿ ಉಪಯೋಗಿಸುತ್ತಿದ್ದಾನೆ.
13 ಆತನ ಬಿಲ್ಲುಗಾರರು ನನ್ನ ಸುತ್ತಲೆಲ್ಲಾ ಇದ್ದಾರೆ.
ಆತನು ನಿಷ್ಕರುಣೆಯಿಂದ ನನ್ನ ಅಂತರಂಗಗಳಿಗೆ
ಬಾಣವನ್ನು ಎಸೆಯುತ್ತಾನೆ; ನೆಲದ ಮೇಲೆ ನನ್ನ
ಪಿತ್ತವನ್ನು ಸುರಿಸುತ್ತಾನೆ.
14 ನನ್ನ ಮೇಲೆ ಎಡಬಿಡದೆ ಆಕ್ರಮಣಮಾಡಿ ಯುದ್ಧ
ವೀರನಂತೆ ನನ್ನ ಮೇಲೆ ಓಡಿಬರುವನು.

15 ‘‘ನಾನು ಬಹು ದುಃಖಿತನಾಗಿದ್ದೇನೆ; ಗೋಣಿ
ತಟ್ಟನ್ನು ಸುತ್ತಿಕೊಂಡಿದ್ದೇನೆ; ಸೋತುಹೋದ
ನೆಂದು ಧೂಳಿನಲ್ಲಿಯೂ ಬೂದಿಯಲ್ಲಿಯೂ
ಕುಳಿತುಕೊಂಡಿದ್ದೇನೆ.
16 ಅತ್ತತ್ತು ನನ್ನ ಮುಖವು ಕೆಂಪಾಗಿದೆ, ನನ್ನ ಕಣ್ಣುಗಳ
ಸುತ್ತಲೂ ಸುಕ್ಕುಗಟ್ಟಿ ಕಡುಕಪ್ಪಾಗಿದೆ.
17 ನಾನು ಯಾರೊಡನೆಯೂ ಕ್ರೂರವಾಗಿ ವರ್ತಿಸ
ಲಿಲ್ಲ. ನನ್ನ ವಿಜ್ಞಾಪನೆಯು ನಿರ್ಮಲವಾಗಿತ್ತು.
18 ‘‘ಭೂಮಿಯೇ, ನನಗಾಗಿರುವ ಕೇಡುಕುಗಳನ್ನು
ಮರೆಮಾಡಬೇಡ. ನ್ಯಾಯಕ್ಕಾಗಿ ನಾನಿಡುವ
ಮೊರೆ ನಿಂತುಹೋಗಲು ಅವಕಾಶಕೊಡಬೇಡ.
19 ‘‘ಈಗಲೂ ಸಹ, ನನಗೆ ಸಾಕ್ಷಿನೀಡುವಾತನು ಪರ
ಲೋಕದಲ್ಲಿದ್ದಾನೆ. ನನಗೆ ಬೆಂಬಲ ನೀಡು
ವಾತನು ಮೇಲ್ಲೋಕದಲ್ಲಿದ್ದಾನೆ.
20 ನನ್ನ ಕಣ್ಣೀರೇ ನನ್ನ ಪ್ರತಿನಿಧಿಯಾಗಿದೆ. ನನ್ನ ಕಣ್ಣು
ದೇವರ ಉತ್ತರಕ್ಕಾಗಿ ಆಕಾಂಕ್ಷೆಯಿಂದ ಎದುರು
ನೋಡುತ್ತಿದೆ.
21 ಒಬ್ಬನು ತನ್ನ ಸ್ನೇಹಿತನಿಗಾಗಿ ಬೇಡಿಕೊಳ್ಳುವಂತೆ
ನನ್ನ ಕಣ್ಣೀರು ನನ್ನ ಪರವಾಗಿ ದೇವರ ಮುಂದೆ
ವಾದಮಾಡುತ್ತದೆ.
22 ‘‘ಯಾಕಂದರೆ ನಾನು ಮರಳಿ ಬರಲಾಗದ ಸ್ಥಳಕ್ಕೆ
ಇನ್ನು ಕೆಲವೇ ವರ್ಷಗಳಲ್ಲಿ ಹೊರಟು
ಹೋಗುವೆನು.

17 ನನ್ನ ಆತ್ಮವು ಒಡೆದುಹೋಗಿದೆ; ನನ್ನ
ಜೀವಿತವು ಮುಗಿದುಹೋಗಿದೆ; ಸಮಾ
ಧಿಯು ನನಗೋಸ್ಕರ ಕಾಯುತ್ತಿದೆ.
2 ಜನರು ನನ್ನ ಸುತ್ತಲೂ ನಿಂತುಕೊಂಡು ನನ್ನನ್ನು
ನೋಡಿ ನಗುತ್ತಿದ್ದಾರೆ. ಅವರು ನನ್ನ ಕಣ್ಣೆದು
ರಿನಲ್ಲೇ ಗೇಲಿ ಮಾಡುತ್ತಾ ಅವಮಾನ
ಮಾಡುತ್ತಿದ್ದಾರೆ.
3 ‘‘ದೇವರೇ, ಕೃಪೆ ತೋರಿ ನಾನು ನಿರಪರಾಧಿ
ಯೆಂಬುದಕ್ಕೆ ನೀನೇ ನನಗೆ ಜಾಮೀನಾಗು. ನಾನು
ನಿರಪರಾಧಿ ಎಂಬುದಕ್ಕೆ ಜಾಮೀನಾಗಲು
ಯಾರೂ ಒಪ್ಪುತ್ತಿಲ್ಲ.
4 ನೀನು ನನ್ನ ಸ್ನೇಹಿತರ ಮನಸ್ಸುಗಳನ್ನು ಮುಚ್ಚಿ
ಬಿಟ್ಟಿರುವೆ; ಅವರು ನನ್ನನ್ನು ಅರ್ಥ ಮಾಡಿಕೊಳ್ಳು
ವುದಿಲ್ಲ. ಅವರಿಗೆ ಜಯವಾಗದಂತೆ ನೋಡಿಕೋ.
5 ‘ಮನುಷ್ಯನು ತನ್ನ ಸ್ನೇಹಿತರಿಗೆ ಸಹಾಯಮಾಡಲು
ತನ್ನ ಮಕ್ಕಳನ್ನೇ ಅಲಕ್ಷಿಸುತ್ತಾನೆ’* ಎಂಬ
ಗಾದೆಯಿದೆ. ಆದರೆ ಈಗ ನನ್ನ ಸ್ನೇಹಿತರು ನನಗೆ
ವಿರೋಧವಾಗಿ ಎದ್ದಿದ್ದಾರೆ.
6 ‘‘ದೇವರು ನನ್ನ ಹೆಸರನ್ನು (ಯೋಬ) ಪ್ರತಿಯೊಬ್ಬ
ರಿಗೂ ಕೆಟ್ಟಪದವನ್ನಾಗಿ ಮಾಡಿದ್ದಾನೆ. ಜನರು ನನ್ನ
ಮುಖಕ್ಕೆ ಉಗುಳುತ್ತಿದ್ದಾರೆ.
7 ನನ್ನ ಕಣ್ಣುಗಳು ಕುರುಡಾಗಿವೆ. ನಾನು ಬಹು
ದುಃಖಿತನಾಗಿದ್ದೇನೆ; ಅತ್ಯಧಿಕವಾದ ನೋವಿನಲ್ಲಿ
ದ್ದೇನೆ. ನನ್ನ ದೇಹವು ನೆರಳಿನಂತೆ ಬಹು ತೆಳ್ಳ
ಗಾಗಿದೆ.
8 ನೀತಿವಂತರು ಇದನ್ನು ಕಂಡು ಗಲಿಬಿಲಿಗೊಂಡಿ
ದ್ದಾರೆ. ನಿರಪರಾಧಿಗಳು ದೇವದೂಷಕರ ವಿಷಯ
ದಲ್ಲಿ ಗಲಿಬಿಲಿಗೊಂಡಿದ್ದಾರೆ.
9 ನೀತಿವಂತರು ಸನ್ಮಾರ್ಗದಲ್ಲಿ ಜೀವಿಸುವರು. ನಿರಪ
ರಾಧಿಗಳು ಸದ್ಗುಣದಲ್ಲಿ ಬಲವಾಗುತ್ತಲೇ ಇರು
ವರು.
10 ‘‘ಆದರೆ ನೀವೆಲ್ಲರೂ ಬನ್ನಿರಿ, ನನ್ನ ತಪ್ಪನ್ನು ತೋರಿ
ಸಿರಿ. ನಿಮ್ಮಲ್ಲಿ ಒಬ್ಬ ಜ್ಞಾನಿಯೂ ಇಲ್ಲ.
11 ನನ್ನ ಜೀವಿತವು ಮುಗಿದುಹೋಗುತ್ತಿದೆ. ನನ್ನ
ಆಲೋಚನೆಗಳೂ ನಿರೀಕ್ಷೆಯೂ ನಾಶವಾಗಿವೆ.
12 ರಾತ್ರಿಯನ್ನು ಹಗಲನ್ನಾಗಿ ಪರಿವರ್ತಿಸುವ, ಬೆಳ
ಕನ್ನು ಕತ್ತಲೆಯನ್ನಾಗಿ ಮಾಡುವ ನನ್ನ ನಿರೀಕ್ಷೆಗಳು
ಇಲ್ಲವಾಗಿವೆ.
13 ‘‘ನಾನು ನಿರೀಕ್ಷಿಸುತ್ತಿರುವ ಮನೆಯು ಕೇವಲ
ಸಮಾಧಿಯಾಗಿದ್ದರೆ, ನನ್ನ ಹಾಸಿಗೆಯನ್ನು ಕತ್ತಲೆ
ಯಲ್ಲಿ ಹಾಸಿಕೊಂಡಿದ್ದರೆ,
14 ನಾನು ಸಮಾಧಿಗೆ, ‘ನೀನೇ ನನ್ನ ತಂದೆಯೆಂದೂ
ಹುಳುವಿಗೆ ‘ನೀನೇ ನನ್ನ ತಾಯಿಯೂ ನನ್ನ
ತಂಗಿಯೂ ಎಂದು ಹೇಳುವುದಾದರೆ,
15 ನನಗೆ ನಿರೀಕ್ಷೆಯೇ ಇಲ್ಲ. ನನ್ನ ನಿರೀಕ್ಷೆಯನ್ನು
ಯಾರೂ ನೋಡಲಾರರು.
16 ನನ್ನ ನೀರಿಕ್ಷೆಯು ಮರಣದ ಸ್ಥಳಕ್ಕೆ ಇಳಿದು
ಹೋಗುವುದೇ? ನಾವು ಒಟ್ಟಾಗಿ ಧೂಳಿಗೆ ಇಳಿದು
ಹೋಗುತ್ತೇವೋ?’’

### ಬಿಲ್ದದನಿಗೆ ಯೋಬನ ಉತ್ತರ

18 ಬಳಿಕ ಶೂಹ್ಯ ದೇಶದ ಬಿಲ್ದದನು ಹೀಗೆ
ಉತ್ತರಕೊಟ್ಟನು:
2 ‘‘ಈ ಮಾತುಗಳನ್ನೆಲ್ಲಾ ಯಾವಾಗ ನಿಲ್ಲಿಸುವೆ? ಪ್ರಜ್ಞೆ
ವುಳ್ಳವನಾಗು, ಆಗ ನಾವು ಮಾತಾಡಲು ಸಾಧ್ಯ.
3 ನಮ್ಮನ್ನು ದಡ್ಡ ಪ್ರಾಣಿಗಳಂತೆ ಯೋಚಿಸಿಕೊಂಡಿ
ರುವುದೇಕೆ?

---

**ಮನುಷ್ಯನು … ನಿನಗೆ ಗೊತ್ತಿದೆ** ಅಕ್ಷರಶಃ, ‘‘ಅವನು ತನ್ನ ಸ್ನೇಹಿತರುಗಳಿಗೆ ಪಾಲನ್ನು ಕೊಡುವುದಾಗಿ ವಾಗ್ದಾನ ಮಾಡುತ್ತಾನೆ ಮತ್ತು ಅವನ ಮಕ್ಕಳ ಕಣ್ಣುಗಳು ಕುರುಡಾಗುತ್ತವೆ.’’

4 ಯೋಬನೇ, ನಿನ್ನ ಕೋಪದಿಂದ ನಿನ್ನನ್ನೇ ಗಾಯ
ಮಾಡಿಕೊಳ್ಳುತ್ತಿರುವೆ. ಕೇವಲ ನಿನಗೋಸ್ಕರ
ಜನರು ಲೋಕವನ್ನು ಬಿಟ್ಟುಹೋಗಬೇಕೇ?
ಕೇವಲ ನಿನ್ನನ್ನು ತೃಪ್ತಿಪಡಿಸುವುದಕ್ಕಾಗಿ ದೇವರು
ಬೆಟ್ಟಗಳನ್ನು ಜರುಗಿಸುತ್ತಾನೆಂದು ಭಾವಿಸಿ
ಕೊಂಡಿರುವಿಯಾ?
5 ''ಹೌದು, ದುಷ್ಟನ ದೀಪವು ಆರಿಹೋಗುವುದು;
ಅವನ ಬೆಂಕಿಯು ಉರಿಯುವುದಿಲ್ಲ.
6 ಅವನ ಗುಡಾರದಲ್ಲಿರುವ ಬೆಳಕು ಕತ್ತಲಾಗು
ವುದು; ಅವನ ಪಕ್ಕದಲ್ಲಿರುವ ದೀಪವು ಆರಿ
ಹೋಗುವುದು.
7 ಅವನ ಹೆಜ್ಜೆಗಳಲ್ಲಿ ಬಲವಿರುವುದಿಲ್ಲ; ಅವನ
ದುಷ್ಟಯೋಜನೆಗಳೇ ಅವನನ್ನು ಬೀಳಿಸುತ್ತವೆ.
8 ಅವನ ಸ್ವಂತ ಕಾಲುಗಳೇ ಅವನನ್ನು ಬಲೆಗೆ ನಡೆಸು
ತ್ತದೆ. ಅವನು ಬಲೆಯೊಳಗೆ ನಡೆದುಹೋಗಿ ಸಿಕ್ಕಿ
ಕೊಳ್ಳುವನು.
9 ಬೋನು ಅವನ ಹಿಮ್ಮಡಿಯನ್ನು ಹಿಡಿದುಕೊಳ್ಳು
ವುದು. ಉರುಲು ಅವನನ್ನು ಗಟ್ಟಿಯಾಗಿ ಹಿಡಿದು
ಕೊಳ್ಳುವುದು.
10 ಅವನಿಗಾಗಿ ಹಗ್ಗವು ನೆಲದ ಮೇಲೆ ಅಡಗಿಕೊಂಡಿ
ರುತ್ತದೆ. ಅವನ ದಾರಿಯಲ್ಲಿ ಉರುಲು ಕಾದು
ಕೊಂಡಿರುತ್ತದೆ.
11 ಎಲ್ಲಾ ಕಡೆಗಳಿಂದಲೂ ಅಪಾಯವು ಅವನನ್ನು
ಭಯಪಡಿಸುತ್ತದೆ. ಅವನಿಡುವ ಪ್ರತಿಯೊಂದು
ಹೆಜ್ಜೆಯನ್ನೂ ಭಯವು ಹಿಂಬಾಲಿಸುತ್ತದೆ.
12 ವಿಪತ್ತುಗಳು ಅವನಿಗಾಗಿ ಹಸಿವೆಯಿಂದ ಕಾದು
ಕೊಂಡಿವೆ. ಅವನು ಬೀಳುವಾಗ ನಾಶನವು ಅವನಿ
ಗಾಗಿ ಸಿದ್ಧವಾಗಿರುತ್ತದೆ.
13 ಭಯಂಕರವಾದ ಕಾಯಿಲೆಯು ಅವನ ಚರ್ಮದ
ಭಾಗಗಳನ್ನು ತಿಂದುಬಿಡುತ್ತದೆ. ಅದು ಅವನ
ತೋಳುಗಳನ್ನೂ ಕಾಲುಗಳನ್ನೂ ಕೊಳೆಸಿ
ಬಿಡುತ್ತದೆ.
14 ದುಷ್ಟನನ್ನು ಅವನ ಸುರಕ್ಷಿತವಾದ ಮನೆಯಿಂದ
ಹೊರಗೆ ಹಾಕಲಾಗುವುದು. ಅವನು ಮರಣವೆಂಬ
ಅಪಾಯಗಳ ರಾಜನ ಕಡೆಗೆ ಮುನ್ನಡೆಯುತ್ತಾ
ಹೋಗುವನು.
15 ಅವನ ಮನೆಯಲ್ಲಿ ಅವನದೇನೂ ಉಳಿದಿರುವು
ದಿಲ್ಲ. ಉರಿಯುವ ಗಂಧಕವು ಅವನ ಆಸ್ತಿಯಲ್ಲೆಲ್ಲಾ
ಹರಡಿಕೊಂಡಿರುತ್ತದೆ.
16 ಅವನ ಬೇರುಗಳು ಕೆಳಗೆ ಒಣಗಿ ಹೋಗು
ತ್ತವೆ. ಅವನ ಕೊಂಬೆಗಳು ಮೇಲೆ ಸತ್ತು
ಹೋಗುತ್ತವೆ.
17 ಭೂಮಿಯ ಮೇಲಿರುವ ಜನರು ಅವನನ್ನು ಜ್ಞಾಪಿಸಿ
ಕೊಳ್ಳುವುದಿಲ್ಲ; ಇನ್ನುಮೇಲೆ ಅವನನ್ನು ಯಾರೂ
ಜ್ಞಾಪಿಸಿಕೊಳ್ಳುವುದಿಲ್ಲ.
18 ಜನರು ಅವನನ್ನು ಬೆಳಕಿನಿಂದ ತಳ್ಳಿಬಿಡುವರು; ಅವ
ನನ್ನು ಕತ್ತಲೆಯೊಳಗೆ ನೂಕಿಬಿಡುವರು. ಅವರು
ಅವನನ್ನು ಲೋಕದಿಂದಲೇ ಅಟ್ಟಿಬಿಡುವರು.
19 ಅವನಿಗೆ ಸ್ವಜನರ ಮಧ್ಯದಲ್ಲಿ ಮಕ್ಕಳಾಗಲೀ ಸಂತತಿ
ಯವರಾಗಲೀ ಇರುವುದಿಲ್ಲ. ಅವನ ಮನೆಯಲ್ಲಿ
ಯಾರೂ ಉಳಿದಿರುವುದಿಲ್ಲ.
20 ಪಶ್ಚಿಮದಲ್ಲಿ ವಾಸವಾಗಿರುವ ಜನರು ದುಷ್ಟನಿಗೆ
ಸಂಭವಿಸಿದ್ದನ್ನು ಕೇಳಿ ಬೆರಗಾಗುವರು: ಪೂರ್ವ
ದಲ್ಲಿ ವಾಸವಾಗಿರುವ ಜನರು ಭೀತಿಯಿಂದ
ನಡುಗುವರು.
21 ಇದು ಸತ್ಯ. ದುಷ್ಟನ ಮನೆಗೆ ಇದೇ ಸಂಭವಿಸುವುದು.
ದೇವರ ಬಗ್ಗೆ ಗಮನಕೊಡದ ವ್ಯಕ್ತಿಗೆ ಇದೇ ಸಂಭ
ವಿಸುವುದು.''

## ಯೋಬನ ಉತ್ತರ

19 ಬಳಿಕ ಯೋಬನು ಹೀಗೆ ಉತ್ತರಕೊಟ್ಟನು:
2 ''ಇನ್ನೆಷ್ಟರವರೆಗೆ ನೀವು ನನ್ನನ್ನು ನೋಯಿ
ಸುವಿರಿ? ನಿಮ್ಮ ಮಾತುಗಳಿಂದ ನನ್ನನ್ನು
ಜಜ್ಜುವಿರಿ?
3 ಇದುವರೆಗೆ ನೀವು ನನ್ನನ್ನು ಹತ್ತಾರು ಸಲ ಅವ
ಮಾನ ಮಾಡಿರುವಿರಿ. ನೀವು ನಾಚಿಕೆಯಿಲ್ಲದೆ
ನನ್ನನ್ನು ಎದುರಿಸುತ್ತೀರಿ!
4 ಒಂದು ವೇಳೆ ನಾನು ಪಾಪಮಾಡಿದ್ದರೂ ಆ ತಪ್ಪು
ನನ್ನದೇ.
5 ನಿಮ್ಮನ್ನು ನನಗಿಂತಲೂ ಉತ್ತಮರೆಂದು ತೋರಿಸಿ
ಕೊಳ್ಳಬೇಕೆಂದಿದ್ದೀರಿ; ನನ್ನ ತೊಂದರೆಗಳೇ
ನನ್ನನ್ನು ದೋಷಿಯೆಂದು ನಿರೂಪಿಸುತ್ತವೆಯೆಂದು
ಭಾವಿಸಿಕೊಂಡಿದ್ದೀರಿ.
6 ಆದರೆ ನನ್ನನ್ನು ದೋಷಿಯೊ ಎಂಬಂತೆ ಮಾಡಿದಾ
ತನು ದೇವರೇ. ಆತನು ನನಗೆ ವಿರೋಧವಾಗಿ
ಬಲೆಯನ್ನು ಒಡ್ಡಿದ್ದಾನೆ.
7 'ನನಗೆ ಹಿಂಸೆಯಾಗುತ್ತಿದೆ' ಎಂದು ಕೂಗಿ
ಕೊಂಡರೂ ನನಗೆ ಯಾರೂ ಉತ್ತರ ಕೊಡುತ್ತಿಲ್ಲ.
ನಾನು ಸಹಾಯಕ್ಕಾಗಿ ಗಟ್ಟಿಯಾಗಿ ಕೂಗಿ
ಕೊಂಡರೂ ನ್ಯಾಯ ದೊರೆಯುತ್ತಿಲ್ಲ.
8 ದೇವರು ನನ್ನ ಮಾರ್ಗವನ್ನು ಮುಚ್ಚಿಬಿಟ್ಟಿದ್ದಾನೆ;
ಆದ್ದರಿಂದ ನಾನು ಮುಂದೆ ಹೋಗಲಾರೆ. ಆತನು
ನನ್ನ ಮಾರ್ಗವನ್ನು ಕತ್ತಲೆಯಲ್ಲಿ ಮರೆ
ಮಾಡಿದ್ದಾನೆ.

9 ದೇವರು ನನ್ನ ಗೌರವವನ್ನು ತೆಗೆದುಹಾಕಿದ್ದಾನೆ. ಆತನು ನನ್ನ ತಲೆಯಿಂದ ಕಿರೀಟವನ್ನು ತೆಗೆದು ಹಾಕಿದ್ದಾನೆ.
10 ನಾನು ಸಾಯುವತನಕ ದೇವರು ನನ್ನನ್ನು ಎಲ್ಲಾ ಕಡೆಗಳಿಂದಲೂ ಅಪ್ಪಳಿಸಿ ಕೆಡುವುತ್ತಿದ್ದಾನೆ. ಬೇರುಗಳ ಸಹಿತ ಕೀಳಲ್ಪಟ್ಟ ಮರದ ಹಾಗೆ ಆತನು ನನ್ನ ನಿರೀಕ್ಷೆಯನ್ನು ತೆಗೆದುಹಾಕಿದ್ದಾನೆ.
11 ದೇವರ ಕೋಪವು ನನಗೆ ವಿರೋಧವಾಗಿ ಉರಿಯುತ್ತಿದೆ. ಆತನು ನನ್ನನ್ನು ತನ್ನ ಶತ್ರುವೆಂಬುದಾಗಿ ಕರೆಯುತ್ತಾನೆ.
12 ನನ್ನ ಮೇಲೆ ಆಕ್ರಮಣಮಾಡಲು ದೇವರು ತನ್ನ ಸೈನ್ಯವನ್ನು ಕಳುಹಿಸಿದ್ದಾನೆ. ಅವರು ನನಗೆ ವಿರುದ್ಧವಾಗಿ ದಿಬ್ಬಹಾಕಿದ್ದಾರೆ. ಅವರು ನನ್ನ ಗುಡಾರದ ಸುತ್ತಲೂ ಪಾಳೆಯಮಾಡಿಕೊಂಡಿದ್ದಾರೆ.
13 ‘‘ನನ್ನ ಸಹೋದರರು ನನ್ನನ್ನು ತೊರೆದುಬಿಡುವಂತೆ ದೇವರು ಮಾಡಿದ್ದಾನೆ. ನಾನು ನನ್ನ ಸ್ನೇಹಿತರಿಗೆಲ್ಲಾ ಅಪರಿಚಿತನಾಗಿದ್ದೇನೆ.
14 ನನ್ನ ಸಂಬಂಧಿಕರು ನನ್ನನ್ನು ತೊರೆದುಬಿಟ್ಟರು. ನನ್ನ ಸ್ನೇಹಿತರು ನನ್ನನ್ನು ಮರೆತುಬಿಟ್ಟರು.
15 ನನ್ನ ಮನೆಯಲ್ಲಿರುವ ಸಂದರ್ಶಕರೂ ನನ್ನ ದಾಸಿಯರೂ ನನ್ನನ್ನು ಅಪರಿಚಿತನಂತೆ ಮತ್ತು ಪರದೇಶಿಯಂತೆ ಕಾಣುತ್ತಾರೆ.
16 ನಾನು ನನ್ನ ಸೇವಕನನ್ನು ಕರೆದರೂ ಅವನು ನನಗೆ ಉತ್ತರಿಸುವುದಿಲ್ಲ. ನಾನು ಸಹಾಯಕ್ಕಾಗಿ ಬೇಡಿಕೊಂಡರೂ ನನ್ನ ಸೇವಕನು ಉತ್ತರ ಕೊಡುವುದಿಲ್ಲ.
17 ನನ್ನ ಉಸಿರು ನನ್ನ ಹೆಂಡತಿಗೆ ಅಸಹ್ಯವಾಗಿದೆ. ನನ್ನ ಸ್ವಂತ ಸಹೋದರರರೂ ನನ್ನನ್ನು ಕಂಡು ಹೇಸಿಗೆಪಡುತ್ತಾರೆ.
18 ಚಿಕ್ಕಮಕ್ಕಳು ಸಹ ನನ್ನನ್ನು ಗೇಲಿಮಾಡುತ್ತಾರೆ. ನಾನು ಎದ್ದುನಿಂತಾಗ ಅವರು ನನಗೆ ವಿರೋಧವಾಗಿ ಮಾತಾಡುವರು.
19 ನನ್ನ ಎಲ್ಲಾ ಆಪ್ತಸ್ನೇಹಿತರು ನನ್ನನ್ನು ನೋಡಿ ಅಸಹ್ಯಪಡುತ್ತಾರೆ. ನಾನು ಯಾರನ್ನು ಪ್ರೀತಿಸಿದೆನೊ ಅವರೂ ನನಗೆ ವಿರೋಧವಾಗಿ ಎದ್ದಿದ್ದಾರೆ.
20 ‘ನನ್ನ ಶಕ್ತಿಯೆಲ್ಲಾ ಕಳೆದುಹೋಗಿದೆ. ನಾನು ಅಸ್ಥಿಪಂಜರದಂತೆ ಆಗಿರುವೆ.
21 ‘‘ನನ್ನ ಸ್ನೇಹಿತರೇ, ಕರುಣಿಸಿರಿ, ನೀವಾದರೂ ನನ್ನನ್ನು ಕರುಣಿಸಿರಿ. ದೇವರ ಹಸ್ತವು ನನ್ನನ್ನು ಹೊಡೆದಿದೆ.
22 ದೇವರು ಹಿಂಸಿಸುವಂತೆ ನೀವೂ ನನ್ನನ್ನು ಯಾಕೆ ಹಿಂಸಿಸುತ್ತೀರಿ? ನೀವು ಹಿಂಸೆಪಡಿಸಿದ್ದು ಸಾಕಾಗಲಿಲ್ಲವೇ?
23 ‘‘ನನ್ನ ಮಾತುಗಳನ್ನು ನೆನಪಿನಲ್ಲಿಟ್ಟುಕೊಂಡು ಬರೆದಿಟ್ಟರೆ ಎಷ್ಟೋ ಒಳ್ಳೆಯದು. ಸುರುಳಿಯಲ್ಲಿ ಬರೆದಿಟ್ಟರೆ ಅದೆಷ್ಟೋ ಮೇಲು.
24 ನನ್ನ ಮಾತುಗಳನ್ನು ಸೀಸದ ಹಲಗೆಯ ಮೇಲೆಯೂ ಬಂಡೆಯ ಮೇಲೆಯೂ ಕೆತ್ತಿದರೆ ಎಷ್ಟೋ ಒಳ್ಳೆಯದು. ಆಗ ಅವು ಶಾಶ್ವತವಾಗಿರುತ್ತವೆ.
25 ಜೀವಸ್ವರೂಪನಾದ ಒಬ್ಬನು ನನ್ನ ಪರವಾಗಿ ವಾದಿಸುತ್ತಾನೆಂದು ನನಗೆ ಗೊತ್ತಿದೆ; ಕೊನೆಯಲ್ಲಿ, ಆತನು ಭೂಮಿಯ ಮೇಲೆ ನಿಂತುಕೊಂಡು ನನಗೋಸ್ಕರ ವಾದಿಸುವನು.
26 ನನ್ನ ಚರ್ಮವು ನಾಶವಾದ ಮೇಲೆಯೂ ನಾನು ಈ ದೇಹದಲ್ಲಿ ದೇವರನ್ನು ನೋಡುವೆನು.
27 ನಾನು ಕಣ್ಣಾರೆ ದೇವರನ್ನು ನೋಡುವೆನು. ಬೇರೆ ಯಾರೂ ಅಲ್ಲದೆ ನಾನೇ ಆತನನ್ನು ನೋಡುವೆನು. ಈ ನಿರೀಕ್ಷೆಯಿಂದ ನನ್ನ ಹೃದಯವು ಉಲ್ಲಾಸಗೊಂಡಿದೆ.
28 ‘‘ನಾವು ಯೋಬನಿಗೆ ತೊಂದರೆಕೊಡೋಣ! ಅವನನ್ನು ದೂಷಿಸಲು ಕಾರಣವೊಂದನ್ನು ಹುಡುಕೋಣ’ ’ ಎಂದು ನೀವು ಹೇಳಬಹುದು.
29 ಆದರೆ ನೀವೇ ಖಡ್ಗಕ್ಕೆ ಭಯಪಡಬೇಕಾಗಿದೆ! ಯಾಕಂದರೆ ದೇವರು ದೋಷಿಗಳನ್ನು ಖಡ್ಗದಿಂದ ದಂಡಿಸುತ್ತಾನೆ; ನ್ಯಾಯತೀರ್ಪಿನ ಕಾಲ ಉಂಟೆಂದು ಆಗ ನಿಮಗೆ ತಿಳಿಯುವುದು.’’

### ಚೋಫರನ ಉತ್ತರ

20 ಬಳಿಕ ನಾಮಾಥ್ಯ ದೇಶದ ಚೋಫರನು ಉತ್ತರಕೊಟ್ಟನು:
2 ‘‘ಯೋಬನೇ, ನಿನ್ನ ಆಲೋಚನೆಗಳು ಗಲಿಬಿಲಿಗೊಂಡಿವೆ; ಆದ್ದರಿಂದ ನಾನು ನಿನಗೆ ಉತ್ತರ ಕೊಡಲೇಬೇಕು. ನನ್ನ ಆಲೋಚನೆಗಳನ್ನು ನಿನಗೆ ಬೇಗನೆ ತಿಳಿಸಬೇಕು.
3 ನಿನ್ನ ಉತ್ತರಗಳಿಂದ ನೀನು ನಮಗೆ ಅವಮಾನ ಮಾಡಿರುವೆ! ಆದರೆ ನಾನು ಜ್ಞಾನಿಯಾಗಿದ್ದೇನೆ; ನಿನಗೆ ಹೇಗೆ ಉತ್ತರಕೊಡಬೇಕೆಂಬುದು ನನಗೆ ಗೊತ್ತಿದೆ.
4-5 ‘‘ದುಷ್ಟನ ಆನಂದವು ಬಹುಕಾಲ ಇರುವಂಥದ್ದಲ್ಲ ಎಂಬುದು ನಿನಗೆ ಗೊತ್ತೇ ಇದೆ. ಆದಾಮನನ್ನು ಸೃಷ್ಟಿಸಿದ ಕಾಲದಿಂದಲೂ ಇದು ಸತ್ಯ. ದೇವರನ್ನು ತಿರಸ್ಕರಿಸುವವನು ಅಲ್ಪಕಾಲ ಮಾತ್ರ ಸಂತೋಷದಿಂದಿರುವನು.

6 ದುಷ್ಟನ ಅಹಂಕಾರವು ಆಕಾಶವನ್ನು ತಲುಪ
ಬಹುದು; ಅವನ ತಲೆಯು ಮೋಡಗಳಿಗೆ ತಗುಲ
ಬಹುದು.
7 ಆದರೆ ಅವನು ತನ್ನ ಮಲದ ಹಾಗೆ ನಿಶ್ಯನಾಶ
ವಾಗುವನು. ಅವನನ್ನು ಬಲ್ಲವರು, 'ಅವನೆಲ್ಲಿ?
ಎಂದು ಕೇಳುವರು.
8 ಅವನು ಕನಸಿನಂತೆ ಹಾರಿಹೋಗುವನು. ಯಾರೂ
ಅವನನ್ನು ಮತ್ತೆ ನೋಡುವುದಿಲ್ಲ, ರಾತ್ರಿಯ ಕೆಟ್ಟ
ಕನಸಿನಂತೆ ಅವನನ್ನು ಅಟ್ಟಿಬಿಡಲಾಗುವುದು.
9 ಅವನನ್ನು ಕಂಡ ಜನರು, ಅವನನ್ನು ಮತ್ತೆ ನೋಡು
ವುದಿಲ್ಲ. ಅವನ ಕುಟುಂಬವು ಅವನನ್ನು ಮತ್ತೆಂ
ದಿಗೂ ನೋಡುವುದಿಲ್ಲ.
10 ದುಷ್ಟನು ಬಡವರಿಂದ ಕಸಿದುಕೊಂಡದ್ದನ್ನು ಅವನ
ಮಕ್ಕಳು ಕೊಡಬೇಕಾಗುವುದು. ದುಷ್ಟನ ಸ್ವಂತ
ಕೈಗಳೇ ಅವನ ಐಶ್ವರ್ಯವನ್ನು ಹಿಂದಕ್ಕೆ ಕೊಡ
ಬೇಕಾಗುವುದು.
11 ಅವನು ಯುವಕನಾಗಿದ್ದಾಗ ಅವನ ಎಲುಬುಗಳು
ಬಲವಾಗಿದ್ದವು; ಆದರೆ ದೇಹದ ಉಳಿದ ಅಂಗಗ
ಳೊಡನೆ ಅವೂ ಧೂಳು ಪಾಲಾಗುತ್ತವೆ.
12 "ದುಷ್ಟನ ಬಾಯಿಗೆ ಕೆಟ್ಟತನವು ಸಿಹಿಯಾಗಿರು
ವುದು. ಅವನು ಅದನ್ನು ತನ್ನ ನಾಲಿಗೆಯ ಕೆಳಗೆ
ಅಡಗಿಸಿಕೊಳ್ಳುವನು.
13 ಅವನು ಆ ಕೆಟ್ಟತನವನ್ನು ಪಟ್ಟಾಗಿ ಹಿಡಿದುಕೊಂಡು
ಸಂತೋಷಪಡುವನು. ಅದನ್ನು ತನ್ನ ಬಾಯಿಯಲ್ಲಿ
ಸಿಹಿತಿನಿಸಿನಂತೆ ಇಟ್ಟುಕೊಂಡಿರುವನು.
14 ಆದರೆ ಅದು ಅವನ ಹೊಟ್ಟೆಯಲ್ಲಿ ಹಾವಿನ ವಿಷದ
ಹಾಗೆ ಕಹಿಯಾದ ವಿಷವಾಗುವುದು.
15 ದುಷ್ಟನು ಐಶ್ವರ್ಯವನ್ನು ನುಂಗಿಕೊಂಡಿದ್ದರೂ
ಅದನ್ನು ಕಕ್ಕಿಬಿಡುವನು. ಹೌದು, ದೇವರು ಅದನ್ನು
ದುಷ್ಟನ ಹೊಟ್ಟೆಯೊಳಗಿಂದ ಕಕ್ಕಿಸಿಬಿಡುವನು.
16 ದುಷ್ಟನ ಪಾನೀಯವು ಹಾವಿನ ವಿಷದಂತಿದೆ.
ಹಾವಿನ ನಾಲಿಗೆಯು ಅವನನ್ನು ಕೊಲ್ಲುವುದು.
17 ಆ ದುಷ್ಟನು ಹಾಲೂ ಜೇನೂ ಹರಿಯುವ ನದಿ
ಗಳನ್ನು ನೋಡುವುದೇ ಇಲ್ಲ.
18 ದುಷ್ಟನು ಗಳಿಸಿದ ಲಾಭಗಳು ಬೇರೆಯವರ ಪಾಲಾ
ಗುವುದು. ತನ್ನ ಲಾಭವನ್ನು ಅನುಭವಿಸಲು ಅವನಿಗೆ
ಸಾಧ್ಯವಾಗದು.
19 ಯಾಕಂದರೆ ದುಷ್ಟನು ಬಡವರನ್ನು ಕಡೆಗಣಿಸಿ
ದ್ದಾನೆ; ಬೇರೊಬ್ಬನು ಕಟ್ಟಿದ ಮನೆಗಳನ್ನು ಕಿತ್ತು
ಕೊಂಡಿದ್ದಾನೆ.
20 "ಅವನಿಗೆ ತೃಪ್ತಿಯೇ ಇಲ್ಲ. ಅವನ ಐಶ್ವರ್ಯವು
ಅವನನ್ನು ರಕ್ಷಿಸಲಾರದು.
21 ಅವನು ತಿಂದ ಮೇಲೆ ಏನೂ ಉಳಿದಿರುವುದಿಲ್ಲ.
ಅವನ ಅಭಿವೃದ್ಧಿಯು ನಿಂತು ಹೋಗುವುದು.
22 ದುಷ್ಟನು ಸಮೃದ್ಧಿಯಿಂದಿರುವಾಗಲೇ ಇಕ್ಕಟ್ಟಿ
ನಿಂದ ಕುಗ್ಗಿಸಲ್ಪಡುವನು; ಕಷ್ಟಗಳು ಅವನ
ಮೇಲೆರಗುತ್ತವೆ!
23 ದುಷ್ಟನು ತನ್ನ ಇಷ್ಟಾನುಸಾರ ತಿಂದಮೇಲೆ ದೇವರು
ತನ್ನ ದಹಿಸುವ ಕೋಪವನ್ನು ತೋರಿ ಅವನ ಮೇಲೆ
ದಂಡನೆಯ ಮಳೆ ಸುರಿಸುವನು.
24 ದುಷ್ಟನು ಕಬ್ಬಿಣದ ಖಡ್ಗದಿಂದ ಓಡಿಹೋಗುವನು;
ಆದರೆ ತಾಮ್ರದ ಬಾಣವು ಅವನನ್ನು ಹೊಡೆದುರು
ಳಿಸುವುದು.
25 ಅವನು ಅದನ್ನು ಕೀಳಲು ಅದು ಬೆನ್ನಿನಿಂದ
ಬರುವುದು; ಥಳಥಳಿಸುವ ಬಾಣದ ತುದಿಯು
ಪಿತ್ತಕೋಶದೊಳಗಿಂದ ಬರುವುದು. ಅವನು
ಅಪಾಯದಿಂದ ದಿಗ್ಭ್ರಾಂತನಾಗುವನು.
26 ಅವನ ಭಂಡಾರಗಳೆಲ್ಲಾ ನಾಶವಾಗುತ್ತವೆ.
ಯಾರೂ ಹೊತ್ತಿಸದ ಬೆಂಕಿಯಿಂದ ಅವನು ನಾಶ
ವಾಗುವನು. ಅವನ ಗುಡಾರದಲ್ಲಿ ಉಳಿದಿರುವು
ದೆಲ್ಲವನ್ನು ಬೆಂಕಿಯು ನಾಶಮಾಡುವುದು.
27 ದುಷ್ಟನು ಅಪರಾಧಿಯೆಂದು ಪರಲೋಕವು
ನಿರೂಪಿಸುತ್ತದೆ. ಭೂಮಿಯು ಅವನಿಗೆ ವಿರೋಧ
ವಾಗಿ ಸಾಕ್ಷಿಹೇಳುತ್ತದೆ.
28 ಅವನ ಮನೆಯಲ್ಲಿರುವ ಪ್ರತಿಯೊಂದನ್ನು ದೇವರ
ಕೋಪದ ಪ್ರವಾಹವು ಕೊಚ್ಚಿಕೊಂಡು ಹೋಗು
ವುದು.
29 ದುಷ್ಟರಿಗೆ ದೇವರು ಮಾಡುವುದು ಇದನ್ನೇ.
ಅವರಿಗೆ ದೇವರು ಕೊಡುವುದೂ ಇದನ್ನೇ."

### ಯೋಬನ ಉತ್ತರ

21 ಬಳಿಕ ಯೋಬನು ಉತ್ತರಕೊಟ್ಟನು:
2 "ನಾನು ಹೇಳುವುದನ್ನು ಕೇಳಿ. ನಿಮ್ಮಿಂದ
ನನಗಾಗಬೇಕಾದ ಆದರಣೆ ಇಷ್ಟೇ.
3 ನಾನು ಮಾತಾಡುವಾಗ ತಾಳ್ಮೆಯಿಂದಿರಿ. ನಾನು
ಮಾತಾಡಿದ ಮೇಲೆ ನೀವು ನನ್ನನ್ನು ಗೇಲಿ
ಮಾಡಿದರೂ ಮಾಡಿರಿ.
4 "ನಾನು ಮನುಷ್ಯನ ವಿರೋಧವಾಗಿ ದೂರು ಹೇಳು
ತ್ತಿಲ್ಲ. ನನ್ನಲ್ಲಿ ತಾಳ್ಮೆಯಿಲ್ಲದಿರುವುದಕ್ಕೆ ಒಂದು
ಒಳ್ಳೆಯ ಕಾರಣವಿದೆ.
5 ನನ್ನನ್ನು ನೋಡಿ ಬೆರಗಾಗಿ ನಿಮ್ಮ ಬಾಯಿಯ
ಮೇಲೆ ಕೈಯಿಟ್ಟುಕೊಳ್ಳಿರಿ, ಗಾಬರಿಯಿಂದ
ನನ್ನನ್ನು ಎವೆಯಿಕ್ಕದೆ ನೋಡಿರಿ!

6 ನನಗೆ ಸಂಭವಿಸಿದ ಬಗ್ಗೆ ನಾನು ಯೋಚಿಸುವಾಗ
ನನಗೆ ಭಯವಾಗುತ್ತದೆ; ನನ್ನ ದೇಹವು ನಡು
ಗುತ್ತದೆ.
7 ದುಷ್ಟರು ದೀರ್ಘಕಾಲ ಜೀವಿಸುವುದೇಕೆ? ಅವರು
ವೃದ್ಧರಾಗುವವರೆಗೂ ಅಭಿವೃದ್ಧಿಯಾಗುತ್ತಾ
ಬಾಳುವುದೇಕೆ?
8 ದುಷ್ಟರ ಮಕ್ಕಳು ತಮ್ಮ ತಂದೆ ತಾಯಿಗಳೊಂ
ದಿಗಿದ್ದು ಬೆಳೆಯುವರು; ದುಷ್ಟರು ತಮ್ಮ ಮೊಮ್ಮ
ಕ್ಕಳನ್ನೂ ನೋಡುವರು.
9 ಅವರ ಕುಟುಂಬಗಳು ಸುರಕ್ಷಿತವಾಗಿರುವುದರಿಂದ
ಅವರಿಗೆ ಭಯವಿಲ್ಲ. ದೇವರು ದುಷ್ಟರನ್ನು ತನ್ನ
ದೊಣ್ಣೆಯಿಂದ ದಂಡಿಸುವುದಿಲ್ಲ.
10 ಅವರ ಹೋರಿಗಳು ತಪ್ಪದೆ ಸಂಗಮಿಸುತ್ತವೆ. ಅವರ
ಹಸುಗಳು ಕರುಗಳನ್ನು ಈಯುತ್ತವೆ.
11 ದುಷ್ಟರು ತಮ್ಮ ಮಕ್ಕಳನ್ನು ಕುರಿಮರಿಗಳಂತೆ
ಆಟವಾಡಲು ಹೊರಗೆ ಕಳುಹಿಸುವರು. ಅವರ
ಮಕ್ಕಳು ಸುತ್ತಮುತ್ತ ಕುಣಿದಾಡುವರು.
12 ಅವರು ತಂಬೂರಿಗಳನ್ನೂ ಹಾರ್ಪ್‌ವಾದ್ಯಗಳನ್ನು
ಬಾರಿಸುತ್ತಾ ಹಾಡುವರು; ಕೊಳಲುಗಳ ಧ್ವನಿಗೆ
ಉಲ್ಲಾಸಪಡುವರು.
13 ದುಷ್ಟರು ತಮ್ಮ ಜೀವಮಾನವೆಲ್ಲಾ ಏಳಿಗೆ ಹೊಂದು
ವರು. ಅವರು ಸಂಕಟಪಡದೆ ಸತ್ತು ಸಮಾಧಿಗೆ
ಸೇರುವರು.
14 ಆದರೆ ದುಷ್ಟರು ದೇವರಿಗೆ, 'ನಮ್ಮನ್ನು ನಮ್ಮಷ್ಟಕ್ಕೇ
ಬಿಟ್ಟುಕೊಡು! ನಿನ್ನ ಮಾರ್ಗದ ತಿಳುವಳಿಕೆಯೇ
ನಮಗೆ ಬೇಡ' ಎನ್ನುವರು.
15 ದುಷ್ಟರು, 'ಸರ್ವಶಕ್ತನಾದ ದೇವರು ಯಾರು?
ನಾವು ಆತನ ಸೇವೆಮಾಡುವ ಅಗತ್ಯವಿಲ್ಲ! ಆತನಿಗೆ
ಪ್ರಾರ್ಥಿಸುವುದರಿಂದ ಪ್ರಯೋಜನವೇನೂ ಇಲ್ಲ'
ಎಂದು ಹೇಳುವರು.
16 ''ತಮ್ಮ ಏಳಿಗೆಗೆ ಕಾರಣ ತಾವೇ ಎಂದು ದುಷ್ಟರು
ಯೋಚಿಸಿಕೊಂಡಿದ್ದಾರೆ. ಆದರೆ ಅವರ ಆಲೋಚ
ನೆಗಳನ್ನು ನಾನು ತಿರಸ್ಕರಿಸುವೆ.
17 ಎಷ್ಟು ಸಲ ದುಷ್ಟರ ದೀಪವು ಆರಿಹೋಯಿತು?
ಎಷ್ಟು ಸಲ ದುಷ್ಟರಿಗೆ ನಾಶನವು ಬರುವುದು?
ದೇವರು ಎಷ್ಟು ಸಲ ಅವರ ಮೇಲೆ ಕೋಪಗೊಂಡು
ಅವರನ್ನು ದಂಡಿಸುವನು?
18 ಗಾಳಿಯು ಹುಲ್ಲನ್ನೂ ಬಿರುಗಾಳಿಯು ಹೊಟ್ಟನ್ನೂ
ಬಡಿದುಕೊಂಡು ಹೋಗುವಂತೆ ದೇವರು ದುಷ್ಟ
ರನ್ನು ಎಷ್ಟುಸಲ ಬಡಿದುಕೊಂಡು ಹೋಗುವನು?
19 'ದುಷ್ಟನ ಮಕ್ಕಳಿಗೆ ದೇವರು ದಂಡನೆಯನ್ನು ಶೇಖ
ರಿಸಿಡುತ್ತಾನೆ' ಎಂದು ನೀವು ಹೇಳುತ್ತೀರಿ. ಇಲ್ಲ!
ದೇವರು ದುಷ್ಟನನ್ನೇ ದಂಡಿಸಲಿ. ಆಗ, ತನ್ನ ಸ್ವಂತ
ಪಾಪಗಳಿಗಾಗಿ ತನಗೆ ದಂಡನೆಯಾಯಿತೆಂದು
ಅವನು ತಿಳಿದುಕೊಳ್ಳುವನು.
20 ದುಷ್ಟನು ತನ್ನ ಸ್ವಂತ ನಾಶನವನ್ನು ತಾನೇ ನೋಡಲಿ;
ಸರ್ವಶಕ್ತನಾದ ದೇವರ ಕೋಪವನ್ನು ಅನುಭ
ವಿಸಲಿ.
21 ದುಷ್ಟನ ಜೀವಿತವು ಮುಗಿದುಹೋದ ಮೇಲೆ,
ತಾನು ಬಿಟ್ಟುಹೋಗಿರುವ ತನ್ನ ಕುಟುಂಬದ ಬಗ್ಗೆ
ಅವನು ಚಿಂತಿಸುವುದಿಲ್ಲ.
22 'ದೇವರಿಗೆ ಜ್ಞಾನವನ್ನು ಉಪದೇಶಿಸಲು ಯಾರಿಂ
ದಲೂ ಆಗದು. ಎತ್ತರವಾದ ಸ್ಥಳಗಳಲ್ಲಿರುವ
ಜನರಿಗೂ ಸಹ ದೇವರು ನ್ಯಾಯತೀರಿಸುವನು.
23 ಒಬ್ಬನು ತನ್ನ ಜೀವಮಾನವೆಲ್ಲಾ ಯಶಸ್ವಿಯಾಗಿ
ಬಾಳಿ ಸಾಯುವನು. ಅವನು ಸುರಕ್ಷಿತವೂ ಸುಖ
ಕರವೂ ಆದ ಬಾಳ್ವೆಯನ್ನು ನಡೆಸಿದನು.
24 ಅವನ ದೇಹವು ಚೆನ್ನಾಗಿ ಪೋಷಿಸಲ್ಪಟ್ಟಿತು, ಅವನ
ಎಲುಬುಗಳು ಮಜ್ಜೆಯಿಂದ ಇನ್ನೂ ಸಾರವತ್ತಾಗಿ
ರುವುದು.
25 ಆದರೆ ಮತ್ತೊಬ್ಬನು ಕಷ್ಟಕರವಾದ ಜೀವನದ
ನಂತರ ಮನಗುಂದಿದವನಾಗಿ ಸಾಯುವನು.
ಅವನು ಯಾವ ಸುಖವನ್ನೂ ಅನುಭವಿಸಲಿಲ್ಲ.
26 ಕೊನೆಯಲ್ಲಿ ಅವರಿಬ್ಬರೂ ಧೂಳಿನಲ್ಲಿ ಒಟ್ಟಿಗೆ
ಮಲಗಿಕೊಳ್ಳುವರು. ಹುಳುಗಳು ಅವರಿಬ್ಬರನ್ನೂ
ಮುತ್ತಿಕೊಳ್ಳುವವು.
27 ''ಆದರೆ, ನಿಮ್ಮ ಆಲೋಚನೆಗಳನ್ನೂ ನಿಮ್ಮ ಕುಯು
ಕ್ತಿಗಳನ್ನೂ ನಾನು ಬಲ್ಲೆ.
28 'ನೀತಿವಂತನ ಮನೆಯು ಎಲ್ಲಿದೆ? ದುಷ್ಟರು ವಾಸ
ವಾಗಿರುವುದು ಎಲ್ಲಿ?' ಎಂದು ನೀವು ಕೇಳ
ಬಹುದು.
29 ''ನೀವು ಖಂಡಿತವಾಗಿಯೂ ಪ್ರಯಾಣಿಕರನ್ನು ಕೇಳಿ
ದ್ದೀರಿ. ನೀವು ಖಂಡಿತವಾಗಿಯೂ ಅವರ ವರದಿ
ಯನ್ನು ಒಪ್ಪಿಕೊಳ್ಳುವಿರಿ.
30 ಅಪಾಯ ಬಂದಾಗ ದುಷ್ಟನು ಪಾರಾಗುವನು;
ದೇವರ ಕೋಪವು ತೋರಿಬರುವ ದಿನದಲ್ಲಿ ಅವನು
ತಪ್ಪಿಸಿಕೊಳ್ಳುವನು.
31 ದುಷ್ಟನ ಕೆಟ್ಟಕಾರ್ಯದ ಬಗ್ಗೆ ಅವನ ಮುಖದೆ
ದುರಿನಲ್ಲಿ ಯಾರೂ ಟೀಕಿಸುವುದಿಲ್ಲ. ಅವನು
ಮಾಡಿದ ಕೇಡಿಗಾಗಿ ಯಾರೂ ಅವನನ್ನು ದಂಡಿಸು
ವುದಿಲ್ಲ.
32 ದುಷ್ಟನನ್ನು ಸಮಾಧಿಗೆ ಹೊತ್ತುಕೊಂಡು
ಹೋದಾಗ ಅವನ ಸಮಾಧಿಯ ಸಮೀಪದಲ್ಲಿ
ಕಾವಲುಗಾರರು ನಿಂತುಕೊಳ್ಳುವರು.

33 ಆ ದುಷ್ಟನಿಗೆ ಕಣಿವೆಯ ಮಣ್ಣು ಸಿಹಿಯಾಗಿ
ರುವುದು. ಅವನ ಶವಸಂಸ್ಕಾರದ ಮೆರವಣಿಗೆಯಲ್ಲಿ
ಸಾವಿರಾರು ಜನರು ಸೇರಿಕೊಳ್ಳುವರು.
34 ''ಆದ್ದರಿಂದ ನೀವು ನಿಮ್ಮ ಬರಿದಾದ ಮಾತು
ಗಳಿಂದ ನನ್ನನ್ನು ಸಂತೈಸಲಾರಿರಿ. ನಿಮ್ಮ ಉತ್ತರಗಳು
ಕೇವಲ ಸುಳ್ಳೇ ಆಗಿವೆ.''

### ಎಲೀಫಜನ ಉತ್ತರ

22 ಬಳಿಕ ತೇಮಾನ್ ಪಟ್ಟಣದ ಎಲೀಫಜನು
ಉತ್ತರಕೊಟ್ಟನು:
2 ''ಯಾವನೂ ದೇವರಿಗೆ ಸಹಾಯಮಾಡಲಾರನು.
ಮಹಾಜ್ಞಾನಿಯು ಸಹ ದೇವರಿಗೆ ಉಪಯುಕ್ತ
ನಾಗಲಾರನು.
3 ನಿನ್ನ ನಡತೆಯು ಒಳ್ಳೆಯದಾಗಿದ್ದರೆ, ಅದರಿಂದ
ದೇವರಿಗೆ ಸಹಾಯವಾಗುವುದೇ? ಇಲ್ಲ. ನೀನು
ನೀತಿವಂತನಾಗಿದ್ದರೆ ಸರ್ವಶಕ್ತನಾದ ದೇವರಿಗೆ
ಅದರಿಂದೇನಾದರೂ ಲಾಭವಾಗುವುದೇ?
4 ''ನಿನ್ನ ಆರಾಧನೆಯ ದೆಸೆಯಿಂದ ದೇವರು ನಿನ್ನ
ಮೇಲೆ ಆರೋಪಹೊರಿಸಿ ದಂಡಿಸುವನೇ? ಇಲ್ಲ!
5 ನಿನ್ನ ಪಾಪವು ಅತಿಯಾಯಿತು! ಯೋಬನೇ, ನೀನು
ಪಾಪಮಾಡುವುದನ್ನು ನಿಲ್ಲಿಸಲೇ ಇಲ್ಲ.
6 ಯೋಬನೇ, ನಿಷ್ಕಾರಣವಾಗಿ ನಿನ್ನ ಸಹೋದರರ
ವಸ್ತುಗಳನ್ನು ಒತ್ತೆಯಿಟ್ಟುಕೊಂಡು ಸಾಲಕೊಟ್ಟಿರ
ಬಹುದು. ಜನರ ಬಟ್ಟೆಗಳನ್ನು ತೆಗೆದುಕೊಂಡು
ಅವರನ್ನು ಬೆತ್ತಲೆ ಮಾಡಿರಬಹುದು.
7 ಆಯಾಸಗೊಂಡವರಿಗೆ ನೀರು ಕೊಡದೆ ಹಸಿದ
ವರಿಗೆ ಊಟ ಕೊಡದೆ ಹೋಗಿರಬಹುದು.
8 ಯೋಬನೇ, ಬಲಿಷ್ಠನಾಗಿದ್ದ ನಿನ್ನಲ್ಲಿ ಬೇಸಾಯಕ್ಕೆ
ಬಹಳ ಭೂಮಿಯಿದೆ. ಅಲ್ಲದೆ ಜನರು ಸಹ ನಿನ್ನನ್ನು
ಗೌರವಿಸುತ್ತಿದ್ದರು.
9 ಆದರೆ ವಿಧವೆಯರಿಗೆ ದಾನಮಾಡದೆ ಅವರನ್ನು
ನೀನು ಕಳುಹಿಸಿಬಿಟ್ಟಿರಬಹುದು. ಒಂದು ವೇಳೆ
ನೀನು ಅನಾಥರಿಗೆ ಮೋಸಮಾಡಿರಬಹುದು.
10 ಆದಕಾರಣ ನಿನ್ನ ಸುತ್ತಲೆಲ್ಲಾ ಉರುಲುಗಳಿವೆ;
ಫಕ್ಕನೆ ಬರುವ ವಿಪತ್ತು ನಿನ್ನನ್ನು ಭಯ
ಗೊಳಿಸುವುದು.
11 ಆದಕಾರಣ ನಿನಗೆ ಏನೂ ಕಾಣಲಾಗದಷ್ಟು
ಕತ್ತಲಾಗಿದೆ, ಪ್ರವಾಹದ ನೀರು ನಿನ್ನನ್ನು ಆವರಿಸಿ
ಕೊಂಡಿದೆ.
12 ''ದೇವರು ಅತ್ಯುನ್ನತವಾದ ಪರಲೋಕದಲ್ಲಿ
ವಾಸಿಸುತ್ತಾನೆ. ಆತನು ಅತ್ಯಂತ ಎತ್ತರದಲ್ಲಿರುವ
ನಕ್ಷತ್ರಗಳನ್ನು ಬಗ್ಗಿನೋಡುವನು. ನಕ್ಷತ್ರಗಳು
ಎಷ್ಟು ಎತ್ತರದಲ್ಲಿವೆ ಎಂಬುದನ್ನು ನೀನು ನೋಡ
ಬಲ್ಲೆ.
13 ನೀನಾದರೋ, 'ದೇವರಿಗೆ ಗೊತ್ತಿರುವುದೇನು?
ಕಾರ್ಮೋಡಗಳ ಆಚೆಯಿಂದ ನಮಗೆ ನ್ಯಾಯ
ತೀರಿಸಬಲ್ಲನೇ?
14 ಮೋಡಗಳು ಆತನನ್ನು ಮುಚ್ಚಿಕೊಂಡಿವೆ. ಆಕಾಶ
ದಲ್ಲಿ ನಡೆದಾಡುವ ಆತನು ನಮ್ಮನ್ನು ಕಾಣಲಾ
ರನು' ಎಂದು ಹೇಳುತ್ತಿರುವೆ.
15 ''ಯೋಬನೇ, ದುಷ್ಟರು ನಡೆಯುವ ಹಳೆದಾರಿಯ
ಮೇಲೆ ನೀನು ನಡೆಯುತ್ತಲೇ ಇರುವಿಯೋ?
16 ಆ ದುಷ್ಟರಿಗೆ ಆಕಾಲಮರಣವು ಬಂದಿತು. ಪ್ರವಾಹ
ದಲ್ಲಿನ ಕಟ್ಟಡದಂತೆ ಅವರು ಕೊಚ್ಚಿಕೊಂಡು
ಹೋದರು.
17 ಅವರು ದೇವರಿಗೆ, 'ನಮ್ಮಿಂದ ತೊಲಗಿಹೋಗು;
ಸರ್ವಶಕ್ತನಾದ ದೇವರು ನಮಗೇನು ಮಾಡ
ಲಾರನು!' ಎಂದು ಹೇಳಿದ್ದರು.
18 ಆದರೆ ದೇವರು ಅವರ ಮನೆಗಳನ್ನು ಐಶ್ವರ್ಯ
ದಿಂದ ತುಂಬಿಸಿದನು. ಅಬ್ಬಾ! ದುಷ್ಟರ ಆಲೋ
ಚನೆಯನ್ನು ನಾನು ಅನುಸರಿಸಲಾರೆ.
19 ದುಷ್ಟರ ನಾಶನವನ್ನು ಕಂಡು ನೀತಿವಂತರು
ಸಂತೋಷಪಡುವರು. ನಿರಪರಾಧಿಗಳು ದುಷ್ಟ
ರನ್ನು ಕಂಡು ನಗುತ್ತಾ,
20 'ನಮ್ಮ ಶತ್ರುಗಳು ನಾಶವಾದರು! ಬೆಂಕಿಯು ಅವರ
ಐಶ್ವರ್ಯವನ್ನು ಸುಟ್ಟುಹಾಕಿತು!' ಎಂದು ಹೇಳು
ವರು.
21 ''ಯೋಬನೇ, ಈಗಲಾದರೊ ನಿನ್ನನ್ನು ದೇವರಿಗೆ
ಒಪ್ಪಿಸಿಕೊಟ್ಟು ಆತನೊಂದಿಗೆ ಸಮಾಧಾನ
ಮಾಡಿಕೋ, ಆಗ ನೀನು ಆಶೀರ್ವಾದವನ್ನು
ಹೊಂದಿಕೊಂಡು ಅಭಿವೃದ್ಧಿಯಾಗುವೆ.
22 ಆತನ ಉಪದೇಶವನ್ನು ಸ್ವೀಕರಿಸಿಕೋ. ಆತನ
ವಾಕ್ಯಗಳನ್ನು ನಿನ್ನ ಹೃದಯದಲ್ಲಿಟ್ಟುಕೋ.
23 ಯೋಬನೇ, ನೀನು ಸರ್ವಶಕ್ತನಾದ ದೇವರಿಗೆ ಅಭಿ
ಮುಖನಾಗಿ ನಿನ್ನ ಮನೆಯಲ್ಲಿರುವ ಪಾಪವನ್ನು
ನಿರ್ಮೂಲಮಾಡಿದರೆ, ಉದ್ಧಾರವಾಗುವೆ.
24 ನೀನು ಚಿನ್ನವನ್ನು ಧೂಳೆಂದು ಪರಿಗಣಿಸಬೇಕು.
ನೀನು ಓಫೀರ್ ದೇಶದ ಚಿನ್ನವನ್ನು ನದಿಗಳ
ದಂಡೆಯ ಮೇಲಿರುವ ಕಲ್ಲುಗಳಂತೆ ಪರಿಗಣಿಸ
ಬೇಕು.
25 ಆಗ ಸರ್ವಶಕ್ತನಾದ ದೇವರು ನಿನ್ನ ಪಾಲಿಗೆ ಬೆಳ್ಳಿ
ಯಾಗಿಯೂ ಬಂಗಾರವಾಗಿಯೂ ಇರುವನು.
26 ನೀನು ಸರ್ವಶಕ್ತನಾದ ದೇವರಲ್ಲಿ ಆನಂದಿಸುವೆ.
ದೇವರ ಕಡೆಗೆ ಕಣ್ಣೆತ್ತಿ ನೋಡುವೆ.

27 ನೀನು ಪ್ರಾರ್ಥಿಸುವೆ, ಆತನು ನಿನಗೆ ಕಿವಿಗೊಡು
ವನು; ಆತನಿಗೆ ನಿನ್ನ ಹರಕೆಗಳನ್ನು ಸಲ್ಲಿಸುವೆ.
28 ನಿನ್ನ ಕಾರ್ಯಗಳೆಲ್ಲಾ ಜಯಪ್ರದವಾಗುವುದು;
ನಿನ್ನ ಭವಿಷ್ಯತ್ತು ಪ್ರಕಾಶಮಾನವಾಗುವುದು;
29 ದೇವರು ಅಹಂಕಾರಿಗಳನ್ನು ನಾಚಿಕೆಗೀಡುಮಾಡು
ವನು, ದೀನರಿಗಾದರೋ ಸಹಾಯಮಾಡುವನು.
30 ನಿರಪರಾಧಿಗಳನ್ನು ರಕ್ಷಿಸುವನು. ನೀನು ಪರಿಶುದ್ಧ
ನಾಗಿರುವುದರಿಂದ ನಿನ್ನ ಪ್ರಾರ್ಥನೆಗೆ ಉತ್ತರವಾಗಿ
ಆತನು ಅವರನ್ನು ಕ್ಷಮಿಸುವನು.''

### ಯೋಬನ ಉತ್ತರ

23 ಆಗ ಯೋಬನು ಇಂತೆಂದನು:
2 ''ನಾನಿನ್ನೂ ಸಂಕಟದಲ್ಲಿರುವುದರಿಂದ ಈ
ಹೊತ್ತು ಸಹ ನಾನು ದೂರು ಹೇಳುವೆನು.
3 ಆಹಾ, ದೇವರ ದರ್ಶನವು ನನಗೆ ಎಲ್ಲಿ ಆಗು
ವುದು? ಆತನ ಬಳಿಗೆ ನಾನು ಹೇಗೆ ಹೋಗ
ಬೇಕು? ನನಗೆ ಗೊತ್ತಾಗಿದ್ದರೆ ಎಷ್ಟೋ ಮೇಲು!
4 ಆಗ ನಾನು ದೇವರಿಗೆ ನನ್ನ ವ್ಯಾಜ್ಯದ ಬಗ್ಗೆ
ವಿವರಿಸುತ್ತಿದ್ದೆನು; ನಾನು ನಿರಪರಾಧಿಯೆಂದು
ನಿರೂಪಿಸಲು ನನ್ನ ಬಾಯನ್ನು ವಾದಗಳಿಂದ
ತುಂಬಿಸಿಕೊಳ್ಳುತ್ತಿದ್ದೆನು.
5 ದೇವರ ಪ್ರತ್ಯುತ್ತರವನ್ನು ನಾನು ಕೇಳಬಯಸುವೆ.
ಆತನ ಉತ್ತರಗಳನ್ನು ಅರ್ಥಮಾಡಿಕೊಳ್ಳ
ಬಯಸುವೆ.
6 ದೇವರು ತನ್ನ ಮಹಾಶಕ್ತಿಯನ್ನು ನನಗೆ ವಿರೋಧ
ವಾಗಿ ಬಳಸುವನೇ? ಇಲ್ಲ, ಆತನು ನನಗೆ ಕಿವಿ
ಗೊಡುವನು!
7 ನಾನು ಯಥಾರ್ಥನಾಗಿರುವೆ. ದೇವರು ನನ್ನ
ವಿಷಯವನ್ನು ಕೇಳುವನು; ನನ್ನ ನ್ಯಾಯಾಧಿ
ಪತಿಯು ನನ್ನನ್ನು ಬಿಡುಗಡೆಮಾಡುವನು.
8 ''ಆದರೆ, ನಾನು ಪೂರ್ವಕ್ಕೆ ಹೋದರೂ ದೇವರು
ಅಲ್ಲಿಲ್ಲ. ನಾನು ಪಶ್ಚಿಮಕ್ಕೆ ಹೋದರೂ ದೇವರು
ಅಲ್ಲಿಯೂ ನನಗೆ ಕಾಣುವುದಿಲ್ಲ.
9 ದೇವರು ಉತ್ತರದಿಕ್ಕಿನಲ್ಲಿ ಕಾರ್ಯ ನಿರತನಾಗಿರು
ವಾಗಲೂ ನನಗೆ ಕಾಣುವುದಿಲ್ಲ. ದೇವರು ದಕ್ಷಿಣ
ದಿಕ್ಕಿಗೆ ತಿರುಗಿಕೊಂಡಾಗಲೂ ನನಗೆ ಕಾಣುವು
ದಿಲ್ಲ.
10 ಆದರೆ ನನ್ನ ಪ್ರತಿಯೊಂದು ಹೆಜ್ಜೆಯನ್ನೂ ದೇವರು
ಬಲ್ಲನು. ಆತನು ನನ್ನನ್ನು ಪರೀಕ್ಷಿಸಿ ನೋಡಿದಾಗ
ನಾನು ಅಪ್ಪಟ ಬಂಗಾರದಂತಿರುವುದನ್ನು ಕಂಡು
ಕೊಳ್ಳುವನು.
11 ಆತನ ಮಾರ್ಗದಲ್ಲೇ ನಾನು ನಡೆದಿದ್ದೇನೆ. ನಾನು
ಓರೆಯಾಗದೆ ಆತನ ಮಾರ್ಗವನ್ನೇ ಅನುಸರಿಸಿ
ದ್ದೇನೆ.
12 ಆತನ ಆಜ್ಞೆಗಳನ್ನು ನಾನು ಮೀರಲೇ ಇಲ್ಲ, ಆತನ
ಬಾಯಿಂದ ಬಂದ ಮಾತುಗಳನ್ನು ಮೃಷ್ಟಾನ್ನ
ಕಿಂತಲೂ ಹೆಚ್ಚಾಗಿ ಪ್ರೀತಿಸಿದ್ದೇನೆ.
13 ''ದೇವರು ಎಂದಿಗೂ ಬದಲಾಗುವುದಿಲ್ಲ.
ಯಾವನೂ ಆತನ ಮನಸ್ಸನ್ನು ಮಾರ್ಪಡಿಸ
ಲಾರನು. ದೇವರು ತಾನು ಬಯಸಿದ್ದನ್ನೇ
ಮಾಡುವನು.
14 ದೇವರು ತನ್ನ ಆಲೋಚನೆಗೆ ತಕ್ಕಂತೆ ನನಗೆ
ಮಾಡುವನು. ಆತನಲ್ಲಿ ಇಂಥಾ ಆಲೋಚನೆಗಳು
ಎಷ್ಟೋ ಇವೆ.
15 ಆದಕಾರಣ ನಾನು ಆತನ ಸನ್ನಿಧಿಯಲ್ಲಿ ಭಯ,
ಬ್ರಾಂತನಾಗಿದ್ದೇನೆ. ಇದನ್ನೆಲ್ಲಾ ಯೋಚಿಸುವಾಗ
ಹೆದರಿಕೊಳ್ಳುತ್ತೇನೆ.,
16 ನನ್ನ ಹೃದಯವನ್ನು ಕುಂದಿಸಿದವನೂ ದೇವರೇ.
ನನ್ನನ್ನು ಭಯಭ್ರಾಂತನನ್ನಾಗಿ ಮಾಡಿದವನೂ
ಸರ್ವಶಕ್ತನಾದ ದೇವರೇ.
17 ಕಪ್ಪು ಮೋಡವು ನನ್ನ ಮುಖವನ್ನು ಕವಿದು
ಕೊಳ್ಳುವಂತೆ ಆಪತ್ತುಗಳು ನನಗೆ ಸಂಭವಿಸಿದವು.
ಆದರೆ ಕಾರ್ಗತ್ತಲೆಯೂ ನನ್ನನ್ನು ಮೌನಗೊಳಿಸ
ಲಾರದು.

24 ''ಸರ್ವಶಕ್ತನಾದ ದೇವರು ನ್ಯಾಯತೀರ್ಪಿಗೆ
ಸಮಯವನ್ನು ಗೊತ್ತುಪಡಿಸದಿರುವುದೇಕೆ?
ಆತನನ್ನು ಅರಿತವರಿಗೆ ಸಮಯವು ತಿಳಿಯದಿರುವು
ದೇಕೆ?

2 ''ಜಮೀನಿನ ಮೇರೆಯನ್ನು ಸರಿಸುವವರೂ ಇದ್ದಾರೆ.
ದನಕುರಿಗಳನ್ನು ಅಪಹರಿಸಿಕೊಂಡು ಹೋಗುವ
ವರೂ ಇದ್ದಾರೆ.
3 ಅವರು ಅನಾಥರ ಕತ್ತೆಯನ್ನು ಹೊಡೆದುಕೊಂಡು
ಹೋಗುವರು; ವಿಧವೆಯನ್ನು ಹಸುವನ್ನು ಒತ್ತೆ
ಯಿಟ್ಟುಕೊಳ್ಳುವರು;
4 ನಿರ್ಗತಿಕರನ್ನು ಸ್ಥಳದಿಂದ ಸ್ಥಳಕ್ಕೆ ಅಲೆದಾಡಿಸು
ವರು. ಬಡವರು ಈ ದುಷ್ಟರಿಗೆ ಹೆದರಿ ಅಡಗಿ
ಕೊಳ್ಳುವರು.
5 ''ಬಡವರು ಅಡವಿಯಲ್ಲಿನ ಕಾಡುಕತ್ತೆಗಳೋ
ಎಂಬಂತೆ ತಮ್ಮ ಆಹಾರಕ್ಕಾಗಿ ದಿನವೆಲ್ಲಾ ದುಡಿ
ಯುವರು; ಕೂಳೆ ಬಿಟ್ಟಹೊಲಗಳೇ ಅವರ
ಮಕ್ಕಳಿಗೆ ಆಹಾರವನ್ನು ಒದಗಿಸುತ್ತವೆ.

6 “ಬಡವರು ರಾತ್ರಿಯವರೆಗೂ ಹೊಲಗಳಲ್ಲಿ ಬೆಳೆ ಕೊಯ್ಯುವರು; ದುಷ್ಟರ ದ್ರಾಕ್ಷಿತೋಟದಲ್ಲಿ ಅಳಿದುಳಿದ ದ್ರಾಕ್ಷಿಗಳನ್ನು ಆರಿಸಿಕೊಳ್ಳುವರು.
7 ಅವರು ರಾತ್ರಿಯ ಚಳಿಯಲ್ಲಿಯೂ ಹೊದಿಕೆಯಿಲ್ಲದೆ ಮಲಗುವರು; ಹಾಕಿಕೊಳ್ಳಲು ಅವರಲ್ಲಿ ಬಟ್ಟೆಯೂ ಇಲ್ಲ.
8 ಅವರು ಬೆಟ್ಟಗಳಲ್ಲಿ ಮಳೆಯಿಂದ ನೆನೆದು ಹೋಗಿದ್ದಾರೆ. ಚಳಿಯಿಂದ ರಕ್ಷಿಸಿಕೊಳ್ಳಲು ಏನೂ ಇಲ್ಲದೆ ವಿಶಾಲವಾದ ಬಂಡೆಯ ಮರೆಗಳನ್ನು ಆಶ್ರಯಿಸಿಕೊಳ್ಳುವರು.
9 ದುಷ್ಟರು ತಂದೆಯಿಲ್ಲದ ಮಗುವನ್ನು ಅದರ ತಾಯಿಯಿಂದ ಕಿತ್ತುಕೊಂಡು ಅದನ್ನು ಸಾಲಕ್ಕೆ ಒತ್ತೆಯಾಗಿಟ್ಟುಕೊಳ್ಳುವರು.
10 ಬಡವರು ಬಟ್ಟೆಗಳಿಲ್ಲದೆ ಬೆತ್ತಲೆಯಾಗಿ ದುಡಿಯುವರು. ಅವರು ಹಸಿವೆಯಿಂದಲೇ ದುಷ್ಟರ ಸಿವುಡುಗಳನ್ನು ಹೊರುವರು.
11 ಬಡವರು ಆಲೀವ್ ಎಣ್ಣೆಯ ಗಾಣವಾಡಿಸುವರು; ದಾಹದಿಂದಲೇ ದ್ರಾಕ್ಷಿ ಅಲೆಯಲ್ಲಿ ತುಳಿದು ರಸ ತೆಗೆಯುವರು.
12 ಸಾಯುತ್ತಿರುವ ಜನರ ನರಳಾಟವು ಪಟ್ಟಣದಲ್ಲಿ ಕೇಳಿಬರುತ್ತಿದೆ. ಗಾಯಗೊಂಡಿರುವವರು ಸಹಾಯಕ್ಕಾಗಿ ಮೊರೆಯಿಡುತ್ತಿದ್ದಾರೆ. ಆದರೆ ದೇವರು ಕೇಳಿಸಿಕೊಳ್ಳುವುದಿಲ್ಲ.
13 “ಬೆಳಕಿಗೆ ವಿರೋಧವಾಗಿ ದಂಗೆ ಎದ್ದಿರುವ ಜನರಿದ್ದಾರೆ. ಅವರಿಗೆ ಹಗಲಿನ ಮಾರ್ಗಗಳ ಪರಿಚಯವಿಲ್ಲ. ಅವರು ಅದರ ಮಾರ್ಗಗಳಲ್ಲಿ ಇರುವುದಿಲ್ಲ.
14 ಕೊಲೆಗಾರನು ಮುಂಜಾನೆಯಲ್ಲಿ ಎದ್ದು ದಿಕ್ಕಿಲ್ಲದ ಬಡವರನ್ನು ಕೊಲ್ಲುವನು; ರಾತ್ರಿಯಲ್ಲಿ ಕಳವು ಮಾಡುವನು.
15 ವ್ಯಭಿಚಾರಿಯು ರಾತ್ರಿಗಾಗಿಯೇ ಕಾಯುತ್ತಿರುತ್ತಾನೆ. ‘ಯಾರ ಕಣ್ಣಿಗೂ ಬೀಳಬಾರದು’ ಎಂದು ಮುಖಕ್ಕೆ ಮುಸುಕು ಹಾಕಿಕೊಳ್ಳುವನು.
16 ದುಷ್ಟರು ರಾತ್ರಿಯ ಕತ್ತಲಲ್ಲಿ ಮನೆಗಳಿಗೆ ಕನ್ನ ಕೊರೆಯುವರು; ಹಗಲಲ್ಲಿ ತಮ್ಮ ಮನೆಗಳಲ್ಲಿ ಅಡಗಿಕೊಂಡಿದ್ದು ಬೆಳಕಿಗೆ ಮರೆಯಾಗಿರುವರು.
17 ಆ ದುಷ್ಟರಿಗೆ ಕತ್ತಲೆಯು ಮುಂಜಾನೆಯಂತಿರುವುದು. ಕಾರ್ಗತ್ತಲೆಯ ಭೀಕರತೆಗಳು ಅವರ ಸ್ನೇಹಿತರಾಗಿವೆ.
18 “ಆದರೆ ಪ್ರವಾಹವು ವಸ್ತುಗಳನ್ನು ಕೊಚ್ಚಿಕೊಂಡು ಹೋಗುವಂತೆ ನಾಶನವು ದುಷ್ಟನನ್ನು ಕೊಚ್ಚಿಕೊಂಡು ಹೋಗುವುದು. ಅವರ ಜಮೀನು ಶಾಪಗ್ರಸ್ತವಾಗಿದೆ. ಆದ್ದರಿಂದ ಅವರು ದ್ರಾಕ್ಷಿಹಣ್ಣುಗಳನ್ನು ತಮ್ಮ ತೋಟಗಳಿಂದ ಸಂಗ್ರಹಿಸಲಾರರು.
19 ಬರಗಾಲವೂ ಬಿಸಿಲೂ ಹಿಮದ ನೀರನ್ನು ಹೀರುವಂತೆ ಪಾತಾಳವು ದುಷ್ಟರನ್ನು ಎಳೆದುಕೊಳ್ಳುವುದು.
20 ಸತ್ತುಹೋದ ದುಷ್ಟನನ್ನು ಅವನ ತಾಯಿಯೂ ಮರೆತುಬಿಡುವಳು. ದುಷ್ಟನ ದೇಹವನ್ನು ಹುಳುಗಳು ತಿಂದುಬಿಡುತ್ತವೆ. ಅವನನ್ನು ಇನ್ನೆಂದಿಗೂ ಜ್ಞಾಪಿಸಿಕೊಳ್ಳುವುದಿಲ್ಲ. ದುಷ್ಟನು ಬಿದ್ದುಹೋದ ಮರದಂತೆ ನಾಶವಾಗುವನು.
21 ದುಷ್ಟರು ಬಂಜೆಯರಿಗೆ ಕೇಡು ಮಾಡುವರು; ವಿಧವೆಯರಿಗೆ ಕರುಣೆ ತೋರರು.
22 ಆದರೆ ದೇವರು ತನ್ನ ಶಕ್ತಿಯಿಂದ ಬಲಿಷ್ಠರನ್ನು ನಾಶಮಾಡುವನು; ದುಷ್ಟರು ಜೀವನದಲ್ಲಿ ಬೇರೂರಿಕೊಂಡಿದ್ದರೂ ತಮ್ಮ ಭವಿಷ್ಯತ್ತನ್ನು ತಿಳಿಯದವರಾಗಿದ್ದಾರೆ.
23 ತಾವು ಸುರಕ್ಷಿತವಾಗಿದ್ದೇವೆಂದು ದುಷ್ಟರು ಹೇಳುವುದು ಕೇವಲ ಅಲ್ಪ ಕಾಲದವರೆಗಷ್ಟೇ. ಯಾಕಂದರೆ ದೇವರು ಅವರನ್ನು ಗಮನಿಸುತ್ತಲೇ ಇರುವನು.
24 ದುಷ್ಟರು ಸ್ವಲ್ಪಕಾಲ ಅಭಿವೃದ್ಧಿಗೊಂಡರೂ ಸುಗ್ಗಿಯ ತೆನೆಗಳಂತೆ ಕೊಯ್ಯಲ್ಪಟ್ಟು ಎಲ್ಲರಂತೆ ಇಲ್ಲವಾಗುವರು.
25 “ಇದು ನಿಜವಲ್ಲದಿದ್ದರೆ, ನಾನು ಸುಳ್ಳುಹೇಳಿರುವುದಾಗಿ ಯಾರು ನಿರೂಪಿಸಬಲ್ಲರು? ನನ್ನ ಮಾತುಗಳು ತಪ್ಪಾದವುಗಳೆಂದು ಯಾರು ತೋರಿಸಬಲ್ಲರು?”

## ಯೋಬನಿಗೆ ಬಿಲ್ದದನ ಉತ್ತರ

25 ಬಳಿಕ ಶೂಹ್ಯ ದೇಶದ ಬಿಲ್ದದನು ಉತ್ತರ ಕೊಟ್ಟನು;
2 “ದೇವರು ಸರ್ವಾಧಿಪತಿ . ಎಲ್ಲರೂ ತನ್ನಲ್ಲಿ ಭಯಭಕ್ತಿಯುಳ್ಳವರಾಗುವಂತೆ ಆತನು ಮಾಡುತ್ತಾನೆ. ಆತನು ತನ್ನ ಪರಲೋಕರಾಜ್ಯದಲ್ಲಿ ಸಮಾಧಾನವನ್ನು ನೆಲೆಗೊಳಿಸುವನು.
3 ಯಾವನೂ ಆತನ ಸೈನ್ಯಗಳನ್ನು ಲೆಕ್ಕಿಸಲಾರನು. ಆತನ ಸೂರ್ಯನು ಜನರೆಲ್ಲರ ಮೇಲೆ ಉದಯಿಸುವನು.
4 ದೇವರಿಗೆ ಹೋಲಿಸಿದರೆ ಯಾವನೂ ನೀತಿವಂತನಲ್ಲ. ಯಾವ ಮನುಷ್ಯನೂ ಪರಿಶುದ್ಧನಾಗಿರಲು ಸಾಧ್ಯವಿಲ್ಲ.
5 ದೇವರ ದೃಷ್ಟಿಯಲ್ಲಿ ಚಂದ್ರನು ಸಹ ಪ್ರಕಾಶವಾಗಿಲ್ಲ; ನಕ್ಷತ್ರಗಳು ಸಹ ಪರಿಶುದ್ಧವಲ್ಲ.

6 ಹೀಗಿರಲು,ಮನುಷ್ಯನು ಎಷ್ಟೋ ಅಪರಿಶುದ್ಧನು!
ಅವನು ಕೇವಲ ನಿಷ್ಪ್ರಯೋಜಕವಾದ ಹುಳು
ವಿನಂತಿದ್ದಾನೆ!''

## ಬಿಲ್ದದನಿಗೆ ಯೋಬನ ಉತ್ತರ

26 ಆಗ ಯೋಬನು ಹೀಗೆ ಉತ್ತರಕೊಟ್ಟನು:
2 ''ನಿನ್ನಿಂದ ಬಲಹೀನನಿಗೆ ಎಷ್ಟೋ
ಸಹಾಯವಾಯಿತು! ನೀನು ನನ್ನ ಬಲಹೀನವಾದ
ತೋಳುಗಳನ್ನು ಮತ್ತೆ ಬಲಗೊಳಿಸಿದೆ!
3 ಹೌದು, ಅಜ್ಞಾನಿಗೆ ಎಷ್ಟೋ ಒಳ್ಳೆಯ ಬುದ್ಧಿವಾದ
ಮಾಡಿದೆ! ನೀನು ಎಷ್ಟು ಜ್ಞಾನಿ ಎಂಬುದನ್ನು
ತೋರಿಸಿಕೊಟ್ಟಿರುವೆ.*
4 ಇವುಗಳನ್ನು ತಿಳಿಸಲು ನಿನಗೆ ಯಾರು ಸಹಾಯ
ಮಾಡಿದವರು? ಯಾರ ಆತ್ಮವು ನಿನ್ನನ್ನು
ಪ್ರೇರೇಪಿಸಿತು?
5 ''ಸತ್ತವರ ಆತ್ಮಗಳು ಭೂಗರ್ಭದಲ್ಲಿರುವ ಜಲರಾಶಿ
ಗಳಲ್ಲಿ ನಡುಗುತ್ತವೆ;
6 ದೇವರಿಗೆ ಪಾತಾಳವೂ ಸ್ಪಷ್ಟವಾಗಿ ಕಾಣುತ್ತದೆ;
ಮರಣವು ಆತನಿಗೆ ಮರೆಯಾಗಿಲ್ಲ.
7 ದೇವರು ಶೂನ್ಯದ ಮೇಲೆ ಉತ್ತರದಿಕ್ಕಿನ ಆಕಾಶ
ವನ್ನುವಿಸ್ತರಿಸಿದನು. ಆತನು ಭೂಮಿಯನ್ನು
ಯಾವ ಆಧಾರವೂ ಇಲ್ಲದೆ ತೂಗುಹಾಕಿದ್ದಾನೆ.
8 ದೇವರು ಮೋಡಗಳನ್ನು ನೀರಿನಿಂದ ತುಂಬಿಸು
ವನು. ಆದರೆ ಮೋಡಗಳು ನೀರಿನ ಭಾರದಿಂದ
ಒಡೆದುಹೋಗದಂತೆ ನೋಡಿಕೊಳ್ಳುವನು.
9 ದೇವರು ತನ್ನ ಮೋಡಗಳನ್ನು ಹರಡಿ ಪೂರ್ಣ
ಚಂದ್ರನನ್ನು ಮರೆಮಾಡುವನು.
10 ದೇವರು ಸಮುದ್ರದ ಮೇಲೆ ಬೆಳಕು ಮತ್ತು
ಕತ್ತಲೆಗಳು ಸಂಧಿಸುವ ಸ್ಥಳದಲ್ಲಿ ಕ್ಷಿತಿಜವನ್ನು*
ಗಡಿರೇಖೆಯನ್ನಾಗಿ ಎಳೆದಿದ್ದಾನೆ.
11 ದೇವರು ಗದರಿಸುವಾಗ ಆಕಾಶಮಂಡಲದ ಸ್ತಂಭ
ಗಳು ಭಯದಿಂದ ನಡುಗುತ್ತವೆ.
12 ದೇವರ ಶಕ್ತಿಯು ಸಮುದ್ರವನ್ನು ಪ್ರಶಾಂತ
ಗೊಳಿಸುವುದು. ದೇವರ ಶಕ್ತಿಯು ರಹಬನ*
ಸಹಾಯಕರನ್ನು ನಾಶಮಾಡುವುದು.
13 ದೇವರ ಉಸಿರು ಆಕಾಶಮಂಡಲವನ್ನು ಶುಭ್ರ
ಗೊಳಿಸುವುದು. ದೇವರ ಜ್ಞಾನವು ಓಡಿಹೋಗಲು
ಪ್ರಯತ್ನಿಸಿದ ರಹಬನನ್ನು ನಾಶಮಾಡುವುದು.
14 ದೇವರ ಶಕ್ತಿಯುತವಾದ ಕಾರ್ಯಗಳಲ್ಲಿ ಇವು
ಕೇವಲ ಒಂದು ಚಿಕ್ಕ ಭಾಗವಾಗಿವೆ. ಆತನ ವಿಷಯ
ವಾಗಿ ಸೂಕ್ಷ್ಮಧ್ವನಿಯನ್ನು ಮಾತ್ರ ಕೇಳಿದ್ದೇವೆ.
ಆತನ ಶಕ್ತಿಯ ಗರ್ಜನೆಯನ್ನು ಯಾರು ಸಂಪೂರ್ಣ
ವಾಗಿ ಅರ್ಥಮಾಡಿಕೊಳ್ಳಬಲ್ಲರು?''

27 ಬಳಿಕ ಯೋಬನು ತನ್ನ ಮಾತನ್ನು ಮುಂದು
ವರಿಸಿದನು:
2 ''ದೇವರ ಮೇಲೆ ಆಣೆಯಿಟ್ಟು ಹೇಳುವೆ. ಆತನು
ನನಗೆ ನ್ಯಾಯವನ್ನು ದೊರಕಿಸದೆ ನನ್ನ
ಜೀವನವನ್ನು ಕಹಿಯನ್ನಾಗಿ ಮಾಡಿದನು.
3 ಆದರೆ ಜೀವವು ನನ್ನೊಳಗಿರುವ ತನಕ, ದೇವರ
ಜೀವಶ್ವಾಸವು ನನ್ನ ಮೂಗಿನಲ್ಲಿ ಇರುವವರೆಗೆ,
4 ನನ್ನ ತುಟಿಗಳು ಕೆಟ್ಟ ಮಾತುಗಳನ್ನು ಆಡುವುದಿಲ್ಲ;
ನನ್ನ ನಾಲಿಗೆಯು ಸುಳ್ಳಾಡುವುದಿಲ್ಲ.
5 ನೀವು ನ್ಯಾಯವಂತರೆಂದು ನಾನು ಒಪ್ಪಿಕೊಳ್ಳು
ವುದಿಲ್ಲ. ನಾನು ನಿರಪರಾಧಿಯೆಂದು ನನ್ನ
ಮರಣದ ದಿನದವರೆಗೂ ಹೇಳುತ್ತಲೇ
ಇರುವೆನು.
6 ನನ್ನ ನೀತಿಯನ್ನು ಬಲವಾಗಿ ಹಿಡಿದುಕೊಳ್ಳುವೆನು;
ಅದನ್ನೆಂದಿಗೂ ಬಿಟ್ಟುಕೊಡೆನು. ನಾನು ಜೀವ
ದಿಂದಿರುವತನಕ ನನ್ನ ಮನಸಾಕ್ಷಿಯು ನನ್ನನ್ನು
ಕಾಡಿಸುವುದೇ ಇಲ್ಲ.
7 ''ನನ್ನ ವೈರಿಗಳಿಗೆ ದುಷ್ಟನ ಗತಿಯಾಗಲಿ. ನನ್ನ
ವಿರೋಧಿಗಳಿಗೆ ಅನೀತಿವಂತರ ಗತಿಯಾಗಲಿ.
8 ದೈವಿಕನಲ್ಲದವನ ಜೀವವನ್ನು ದೇವರು ತೆಗೆದು
ಹಾಕುವಾಗ ಅವನಿಗೆ ನಿರೀಕ್ಷೆಯೇ ಇರುವು
ದಿಲ್ಲ.
9 ಆ ದುಷ್ಟನು ಆಪತ್ತುಗಳಲ್ಲಿರುವಾಗ ದೇವರಿಗೆ
ಮೊರೆಯಿಡುವನು; ಆದರೆ ದೇವರು ಅವನಿಗೆ
ಕಿವಿಗೊಡುವುದಿಲ್ಲ.
10 ಅವನು ಸರ್ವಶಕ್ತನಾದ ದೇವರಲ್ಲಿ ಆನಂದಿಸ
ಬೇಕಿತ್ತು; ಯಾವಾಗಲೂ ಆತನಿಗೆ ಪ್ರಾರ್ಥಿಸ
ಬೇಕಿತ್ತು.
11 ''ನಾನು ನಿಮಗೆ ದೇವರ ಶಕ್ತಿಯ ಬಗ್ಗೆ ಉಪದೇಶಿ
ಸುವೆನು. ಸರ್ವಶಕ್ತನಾದ ದೇವರ ಆಲೋಚನೆ
ಗಳನ್ನು ನಾನು ನಿಮಗೆ ಮರೆಮಾಡುವುದಿಲ್ಲ.
12 ನೀವೆಲ್ಲರೂ ಇವುಗಳನ್ನು ಕಣ್ಣಾರೆ ನೋಡಿದ್ದೀರಿ.
ಹೀಗಿರಲು ಅಂಥ ನಿಷ್ಪ್ರಯೋಜಕ ಸಂಗತಿಗಳನ್ನು
ಯಾಕೆ ಹೇಳುವಿರಿ?

---

**ನಿನ್ನಿಂದ … ತೋರಿಸಿಕೊಟ್ಟಿರುವೆ** ಯೋಬನ 2 ಮತ್ತು 3ನೆಯ ವಚನಗಳು ಆ ಮೂವರ ವಾಸ್ತವ ಚಿತ್ರಣವಲ್ಲ. ನೀವು ಈ ರೀತಿ ಮಾಡಬೇಕಿದ್ದರೂ ಮಾಡಿಲ್ಲ ಎಂಬ ಅರ್ಥ ಬರುವಂತೆ ಯೋಬನು ಇಲ್ಲಿ ತಿಳಿಸಿದ್ದಾನೆ. ಇದಕ್ಕೆ ವ್ಯಂಗ್ಯ ನುಡಿ ಎನ್ನುತ್ತಾರೆ.

**ಕ್ಷಿತಿಜ** ಆಕಾಶವು ಭೂಮಿಯನ್ನು ಸಂಧಿಸುವಂತೆ ಕಾಣುವ ಬಹುದೂರದ ರೇಖೆ.

**ರಹಬ** ಅಥವಾ ಮಹಾಸಮುದ್ರ ಪ್ರಾಣಿ. ಯೆಶಾಯ 27:1 ನ್ನು ನೋಡಿರಿ.

13 ‘‘ದೇವರು ದುಷ್ಟರಿಗೋಸ್ಕರ ಮಾಡಿರುವ ಯೋಜನೆಯೂ ಸರ್ವಶಕ್ತನಾದ ದೇವರಿಂದ ಹಿಂಸಕನಿಗೆ ದೊರೆಯುವ ಸ್ವಾಸ್ತ್ಯವೂ, ಹೀಗಿವೆ:
14 ದುಷ್ಟನು ಅನೇಕ ಮಕ್ಕಳನ್ನು ಪಡೆದುಕೊಂಡರೂ ಅವರು ಯುದ್ಧದಲ್ಲಿ ಕೊಲ್ಲಲ್ಪಡುವರು; ಅವರಿಗೆ ಊಟಕ್ಕೂ ಇರುವುದಿಲ್ಲ.
15 ದುಷ್ಟನ ಮಕ್ಕಳು ಇನ್ನೂ ಉಳಿದುಕೊಂಡಿದ್ದರೆ ಭಯಂಕರವಾದ ರೋಗಗಳಿಂದ ಸಾಯುವರು; ಅವರ ವಿಧವೆಯರು ಅವರಿಗೋಸ್ಕರ ದುಃಖಿಸುವುದಿಲ್ಲ.
16 ದುಷ್ಟನು ಬೆಳ್ಳಿಯನ್ನು ಧೂಳಿನಂತೆ ರಾಶಿಮಾಡಿಕೊಂಡರೂ ಬಟ್ಟೆಗಳನ್ನು ಮಣ್ಣಿನ ರಾಶಿಗಳಂತೆ ಪಡೆದುಕೊಂಡರೂ
17 ಆ ಬಟ್ಟೆಗಳನ್ನು ನೀತಿವಂತರು ಧರಿಸಿಕೊಳ್ಳುವರು; ಅವನ ಬೆಳ್ಳಿಯನ್ನು ನಿರ್ದೋಷಿಗಳು ಹಂಚಿಕೊಳ್ಳುವರು.
18 ದುಷ್ಟನು ಕಟ್ಟುವ ಮನೆಯು ಜೇಡರ ಬಲೆಯಂತೆಯೂ ಕಾವಲುಗಾರನ ಗುಡಾರದಂತೆಯೂ ಕ್ಷಣಿಕವಾಗಿರುವುದು.
19 ದುಷ್ಟನು ಮಲಗಿಕೊಳ್ಳುವಾಗ ಐಶ್ವರ್ಯವಂತನಾಗಿದ್ದರೂ ನಿದ್ರೆಯಿಂದ ಎಚ್ಚೆತ್ತಾಗ ಅವನ ಐಶ್ವರ್ಯವೆಲ್ಲಾ ಹೊರಟುಹೋಗಿರುವುದು.
20 ಆಪತ್ತುಗಳು ಇದ್ದಕ್ಕಿದ್ದಂತೆ ಬರುವ ಪ್ರವಾಹದಂತೆ ಅವನನ್ನು ಆವರಿಸಿಕೊಳ್ಳುತ್ತವೆ. ಬಿರುಗಾಳಿಯು ಅವನನ್ನು ರಾತ್ರಿಯಲ್ಲಿ ಹೊತ್ತುಕೊಂಡು ಹೋಗುವುದು.
21 ಪೂರ್ವದ ಗಾಳಿಯು ಅವನನ್ನು ಹೊತ್ತುಕೊಂಡು ಹೋಗುವುದರಿಂದ ಅವನು ಇಲ್ಲವಾಗುವನು. ಬಿರುಗಾಳಿಯು ಅವನನ್ನು ಮನೆಯೊಳಗಿಂದ ಹೊತ್ತುಕೊಂಡು ಹೋಗುವುದು.
22 ದುಷ್ಟನು ಬಿರುಗಾಳಿಯ ಶಕ್ತಿಯಿಂದ ಓಡಿಹೋಗಲು ಪ್ರಯತ್ನಿಸುವನು. ಆದರೆ ಬಿರುಗಾಳಿಯು ಕರುಣೆಯಿಲ್ಲದೆ ಅವನಿಗೆ ಬಡಿಯುವುದು.
23 ದುಷ್ಟನು ಓಡಿಹೋಗುತ್ತಿರಲು ಜನರು ಚಪ್ಪಾಳೆ ತಟ್ಟುವರು; ಅವನ ಮನೆಯೊಳಗಿಂದ ಓಡಿಹೋಗುತ್ತಿರಲು ಜನರು ಸೀಟಿ ಹೊಡೆಯುವರು.

28 ‘‘ಬೆಳ್ಳಿಯ ಗಣಿಗಳು ಇವೆ; ಚಿನ್ನವನ್ನು ಶುದ್ಧೀಕರಿಸುವ ಸ್ಥಳಗಳೂ ಇವೆ.
2 ಮಣ್ಣಿನೊಳಗಿಂದ ಕಬ್ಬಿಣವನ್ನು ತೆಗೆಯುವರು, ಕಲ್ಲನ್ನು ಕರಗಿಸಿ ತಾಮ್ರವನ್ನು ಪಡೆಯುವರು.
3 ಕಾರ್ಮಿಕರು ದೀಪಗಳನ್ನು ತೆಗೆದುಕೊಂಡು ಆಳವಾದ ಗುಹೆಗಳಲ್ಲಿಯೂ ಕಾರ್ಗತ್ತಲೆಯಲ್ಲಿಯೂ ಕಲ್ಲುಗಳಿಗಾಗಿ ಹುಡುಕುವರು.
4 ಲೋಹದ ಅದುರುಗಳು ಸಿಕ್ಕುವ ಸ್ಥಳಗಳಲ್ಲಿ ಅಗೆಯುತ್ತಾ ಹೋಗುವರು; ಜನರು ವಾಸವಾಗಿರುವುದಕ್ಕಿಂತ ಆಳವಾದ ಸ್ಥಳಕ್ಕೆ ಇಳಿದು ಹೋಗು ವರು; ಆಳವಾದ ಆ ಸ್ಥಳಗಳನ್ನು ಜನರು ಹಿಂದೆಂದೂ ನೋಡಿಯೇ ಇಲ್ಲ. ಅವರು ಹಗ್ಗಗಳನ್ನು ಕಟ್ಟಿಕೊಂಡು ಜನರಿಗೆ ಬಹುದೂರವಾದ ಆಳವಾದ ಗಣಿಗಳಲ್ಲಿ ನೇತಾಡುತ್ತಾ ದುಡಿಯುವರು.
5 ಭೂಮಿಯ ಮೇಲ್ಭಾಗದಿಂದ ಆಹಾರವು ಬೆಳೆಯುತ್ತದೆ. ಭೂಮಿಯ ಕೆಳಭಾಗವಾದರೊ ಬೆಂಕಿಯಿಂದ ಕರಗಿಹೋದಂತಿರುವುದು.
6 ಭೂಮಿಯ ಕೆಳಭಾಗದಲ್ಲಿ ನೀಲಮಣಿಗಳೂ ಚಿನ್ನದ ಅದುರೂ ಸಿಕ್ಕುತ್ತವೆ.
7 ಕಾಡುಪಕ್ಷಿಗಳಿಗೆ ಗಣಿಯ ಮಾರ್ಗವು ಗೊತ್ತಿಲ್ಲ. ಯಾವ ಗಿಡುಗವೂ ಕತ್ತಲೆಯ ಆ ಮಾರ್ಗಗಳನ್ನು ನೋಡಿಲ್ಲ.
8 ಕಾಡುಪ್ರಾಣಿಗಳು ಆ ಮಾರ್ಗಗಳಲ್ಲಿ ನಡೆದಿಲ್ಲ. ಸಿಂಹಗಳು ಆ ಮಾರ್ಗದ ಮೇಲೆ ಹಾದು ಹೋಗಿಲ್ಲ.
9 ಕಾರ್ಮಿಕರು ಅತ್ಯಂತ ಗಟ್ಟಿಯಾದ ಬಂಡೆಗಳನ್ನು ಅಗೆಯುವರು. ಅವರು ಬೆಟ್ಟಗಳನ್ನು ಹೊಡೆದು ನೆಲಸಮ ಮಾಡುವರು.
10 ಕಾರ್ಮಿಕರು ಬಂಡೆಗಳಲ್ಲಿ ಸುರಂಗಗಳನ್ನು ಕೊರೆದು ಬಂಡೆಯ ಭಂಡಾರಗಳನ್ನು ನೋಡುವರು.
11 ಕಾರ್ಮಿಕರು ಹರಿಯುವ ನೀರನ್ನು ತಡೆದು ಜಲಾಶಯವನ್ನು ಕಟ್ಟುವರು; ಮರೆಯಾಗಿರುವ ವಸ್ತುಗಳನ್ನು ಬೆಳಕಿಗೆ ತರುವರು.
12 ‘‘ಆದರೆ ಮನುಷ್ಯನು ಜ್ಞಾನವನ್ನು ಕಂಡುಕೊಳ್ಳುವುದೆಲ್ಲಿ? ವಿವೇಕವು ದೊರೆಯುವ ಸ್ಥಳವೆಲ್ಲಿ?
13 ಜ್ಞಾನದ ಬೆಲೆಯು ಯಾರಿಗೂ ಗೊತ್ತಿಲ್ಲ. ಜನರು ನೆಲವನ್ನು ಅಗೆದು ಜ್ಞಾನವನ್ನು ಕಂಡುಕೊಳ್ಳಲು ಸಾಧ್ಯವಿಲ್ಲ.
14 ‘ಜ್ಞಾನವು ನನ್ನೊಂದಿಗಿಲ್ಲ’ ಎಂದು ಆಳವಾದ ಸಾಗರವು ಹೇಳುತ್ತದೆ. ‘ಜ್ಞಾನವು ನನ್ನೊಂದಿಗಿಲ್ಲ’ ಎಂದು ಸಮುದ್ರವು ಹೇಳುತ್ತದೆ.
15 ಬಂಗಾರವನ್ನು ಕೊಟ್ಟು ಜ್ಞಾನವನ್ನು ಕೊಂಡುಕೊಳ್ಳಲು ಸಾಧ್ಯವಿಲ್ಲ. ಇಡೀ ಲೋಕದ ಬೆಳ್ಳಿಯನ್ನು ಕೊಟ್ಟು ಜ್ಞಾನವನ್ನು ಕೊಂಡುಕೊಳ್ಳಲು ಸಾಧ್ಯವಿಲ್ಲ.

16 ಓಫೀರ್ ದೇಶದ ಬಂಗಾರದಿಂದಾಗಲೀ
ಅಮೂಲ್ಯವಾದ ಗೋಮೇಧಿಕ ರತ್ನದಿಂದಾಗಲೀ
ನೀಲಮಣಿಗಳಿಂದಾಗಲೀ ಜ್ಞಾನವನ್ನು ಕೊಂಡು
ಕೊಳ್ಳಲಾಗದು.
17 ಜ್ಞಾನವು ಬಂಗಾರಕ್ಕಿಂತಲೂ ಶ್ರೇಷ್ಠವಾದ ಗಾಜಿ
ಗಿಂತಲೂ ಹೆಚ್ಚು ಬೆಲೆಬಾಳುತ್ತದೆ. ಬಂಗಾರದ
ಆಭರಣಗಳು ಜ್ಞಾನವನ್ನು ಕೊಂಡುಕೊಳ್ಳಲಾರವು.
18 ಜ್ಞಾನವು ಹವಳಕ್ಕಿಂತಲೂ ಸ್ಫಟಿಕಕ್ಕಿಂತಲೂ ಹೆಚ್ಚು
ಬೆಲೆಬಾಳುತ್ತದೆ. ಜ್ಞಾನವು ಮಾಣಿಕ್ಯಗಿಂತಲೂ
ಅಮೂಲ್ಯವಾಗಿದೆ.
19 ಇಥಿಯೋಪಿಯಾ ದೇಶದ ಗೋಮೇಧಿಕವೂ
ಜ್ಞಾನದಷ್ಟು ಅಮೂಲ್ಯವಲ್ಲ. ಬಂಗಾರವನ್ನು
ಕೊಟ್ಟು ಜ್ಞಾನವನ್ನು ಕೊಂಡುಕೊಳ್ಳಲು
ಅಸಾಧ್ಯ.
20 ‘‘ಹೀಗಿರುವಲ್ಲಿ, ಜ್ಞಾನವು ಎಲ್ಲಿಂದ ಬರುವುದು?
ವಿವೇಕವು ಎಲ್ಲಿ ದೊರಕುವುದು?
21 ಜ್ಞಾನವು ಎಲ್ಲಾ ಜೀವಿಗಳಿಗೂ ಮರೆಯಾಗಿದೆ.
ಆಕಾಶದ ಪಕ್ಷಿಗಳು ಸಹ ಅದನ್ನು ಕಾಣಲಾರವು.
22 ನಾಶಲೋಕವು ಮೃತ್ಯವೂ ‘ನಾವು ಜ್ಞಾನದ ಬಗ್ಗೆ
ಸುದ್ದಿಗಳನ್ನು ಮಾತ್ರ ಕೇಳಿದ್ದೇವೆ’ ಎಂದು ಹೇಳು
ತ್ತವೆ.
23 ಜ್ಞಾನದ ಮಾರ್ಗವನ್ನು ತಿಳಿದಿರುವನು ದೇವರೊ
ಬ್ಬನೇ. ಅದರ ವಾಸಸ್ಥಳವು ಗೊತ್ತಿರುವುದು ಆತನಿ
ಗೊಬ್ಬನಿಗೇ.
24 ದೇವರು ಭೂಮಿಯ ಕಟ್ಟಕಡೆಯತನಕ ದೃಷ್ಟಿಸಿ
ಆಕಾಶದ ಕೆಳಗಿರುವ ಪ್ರತಿಯೊಂದನ್ನೂ ನೋಡುವ
ವನಾಗಿದ್ದಾನೆ.
25 ದೇವರು ಗಾಳಿಗೆ ಶಕ್ತಿಯನ್ನು ಕೊಟ್ಟಾಗಲೂ
ಸಾಗರಗಳ ವಿಸ್ತೀರ್ಣವನ್ನು ನಿರ್ಧರಿಸಿದಾಗಲೂ
26 ಮಳೆಯನ್ನೂ ಗುಡುಗುಸಿಡಿಲುಗಳ ಮಳೆಯನ್ನೂ
ಎಲ್ಲಿಗೆ ಕಳುಹಿಸಬೇಕೆಂದು ನಿರ್ಧರಿಸಿದಾಗಲೂ
27 ಜ್ಞಾನವನ್ನು ಕಂಡುಕೊಂಡನು; ಅದರ ಬೆಲೆಯನ್ನು
ಪರೀಕ್ಷಿಸಿ ತಿಳಿದುಕೊಂಡನು. ಅದಕ್ಕೆ ತನ್ನ ಒಪ್ಪಿಗೆ
ಯನ್ನು ಸೂಚಿಸಿದನು.
28 ಇದಲ್ಲದೆ ದೇವರು ಮನುಷ್ಯರಿಗೆ, ‘‘ಯೆಹೋವ
ನಲ್ಲಿ ಭಯಭಕ್ತಿಯಿಂದಿರುವುದೇ ಜ್ಞಾನ. ದುಷ್ಟ
ತನವನ್ನು ತೊರೆದುಬಿಡುವುದೇ ವಿವೇಕ’’ ಎಂದು
ಹೇಳಿದನು.

### ಯೋಬನು ಮುಂದುವರಿಸಿದ ಮಾತು

29 ಯೋಬನು ಮಾತನ್ನು ಮುಂದುವರಿಸಿ
ಇಂತೆಂದನು:
2 ‘‘ನನ್ನ ಜೀವಿತವು ಕೆಲವು ತಿಂಗಳುಗಳ ಮುಂಚೆ
ಇದ್ದಂತೆ ಈಗಲೂ ಇದ್ದಿದ್ದರೆ ಎಷ್ಟೋ ಒಳ್ಳೆಯ
ದಿತ್ತು. ಆ ದಿನಗಳಲ್ಲಿ ದೇವರು ನನ್ನನ್ನು ಕಾಯುತ್ತಾ
ಪರಿಪಾಲಿಸುತ್ತಿದ್ದನು.
3 ಆ ದಿನಗಳಲ್ಲಿ ದೇವರ ದೀಪವು ನನ್ನ ಮೇಲೆ
ಪ್ರಕಾಶಿಸುತ್ತಿದ್ದ ಕಾರಣ ನಾನು ಕಾರ್ಗತ್ತಲೆಯಲ್ಲೂ
ಸಂಚರಿಸುತ್ತಿದ್ದೆನು.
4 ಆ ದಿನಗಳು ನನ್ನ ಜೀವಿತದ ಸುಗ್ಗಿಕಾಲವಾಗಿದ್ದವು;
ಆ ದಿನಗಳಲ್ಲಿ ದೇವರು ನನ್ನ ಆಪ್ತಗೆಳೆಯ
ನಾಗಿದ್ದನು.
5 ಆ ದಿನಗಳಲ್ಲಿ ಸರ್ವಶಕ್ತನಾದ ದೇವರು
ನನ್ನೊಂದಿಗಿದ್ದನು; ನನ್ನ ಮಕ್ಕಳು ನನ್ನ ಸುತ್ತಲೂ
ಇದ್ದರು.
6 ಆ ದಿನಗಳಲ್ಲಿ ನನ್ನ ಜೀವಿತವು ತುಂಬ ಚೆನ್ನಾಗಿತ್ತು.
ನನ್ನ ಮಾರ್ಗಗಳು ಕೆನೆಯಿಂದ ತುಂಬಿರು
ವಂತೆಯೂ ಬಂಡೆಗಳು ನನಗಾಗಿ ಆಲೀವ್
ಎಣ್ಣೆಯ ನದಿಗಳನ್ನೇ ಹರಿಸುತ್ತಿರುವಂತೆಯೂ ನನ್ನ
ಜೀವಿತವಿತ್ತು.
7 ‘‘ಆ ದಿನಗಳಲ್ಲಿ ನಾನು ನಗರದ ಹೆಬ್ಬಾಗಿಲಿನ ಬಳಿಗೆ
ಹೋಗಿ, ಸಾರ್ವಜನಿಕ ಸಭಾಸ್ಥಳದಲ್ಲಿ ಪಟ್ಟಣದ
ಹಿರಿಯರೊಂದಿಗೆ ಕುಳಿತುಕೊಳ್ಳುತ್ತಿದ್ದೆನು.
8 ಅಲ್ಲಿದ ಜನರೆಲ್ಲರೂ ನನ್ನನ್ನು ಗೌರವಿಸುತ್ತಿದ್ದರು.
ಯೌವನಸ್ಥರು ನನ್ನನ್ನು ಕಂಡು ಹಿಂದಕ್ಕೆ ಸರಿದು
ದಾರಿಮಾಡಿಕೊಡುತ್ತಿದ್ದರು; ವೃದ್ಧರು ಗೌರವ
ದಿಂದ ಎದ್ದುನಿಂತುಕೊಳ್ಳುತ್ತಿದ್ದರು.
9 ಮಾತಾಡುತ್ತಿದ್ದ ಜನನಾಯಕರು ತಮ್ಮ ಬಾಯ
ಮೇಲೆ ಕೈಯಿಟ್ಟುಕೊಂಡು ಮೌನವಾಗುತ್ತಿದ್ದರು.
10 ಪ್ರಮುಖನಾಯಕರುಗಳು ಸಹ ನಾಲಿಗೆಯು ಸಿಕ್ಕಿ
ಕೊಂಡಂತೆ ತಮ್ಮ ಧ್ವನಿಯನ್ನು ಕಡಿಮೆ ಮಾಡು
ತ್ತಿದ್ದರು.
11 ನನ್ನ ಮಾತನ್ನು ಕೇಳಿದವರೆಲ್ಲರೂ ನನ್ನನ್ನು
ಪ್ರಶಂಸಿಸುತ್ತಿದ್ದರು; ನಾನು ಮಾಡಿದ್ದನ್ನು ಕಂಡ
ವರೆಲ್ಲರೂ ನನ್ನನ್ನು ಹೊಗಳುತ್ತಿದ್ದರು.
12 ಯಾಕಂದರೆ ಬೇಡಿಕೊಂಡ ಬಡವನಿಗೆ ಸಹಾಯ
ಮಾಡಿದೆನು; ಗತಿಯಿಲ್ಲದ ಅನಾಥರನ್ನು ರಕ್ಷಿಸಿ
ದೆನು.
13 ಜನರು ತಮ್ಮ ಸಾವಿನ ಗಳಿಗೆಯಲ್ಲೂ ನನ್ನನ್ನು
ಆಶೀರ್ವದಿಸಿದರು. ಕಷ್ಟದಲ್ಲಿದ್ದ ವಿಧವೆಯರಿಗೆ
ನನ್ನಿಂದ ಆನಂದವಾಯಿತು.
14 ನೀತಿಯೇ ನನ್ನ ಉಡುಪಾಗಿತ್ತು; ಅದೇ ನನ್ನ
ನಿಲುವಂಗಿಯಾಗಿತ್ತು. ನ್ಯಾಯವು ನನ್ನ ಪೇಟ
ವಾಗಿತ್ತು.

15 ನಾನು ಕುರುಡನಿಗೆ ಕಣ್ಣಾಗಿಯೂ ಕುಂಟನಿಗೆ
ಕಾಲಾಗಿಯೂ ಇದ್ದೆನು.
16 ನಾನು ಬಡವರಿಗೆ ತಂದೆಯಂತಿದ್ದೆನು. ತೊಂದರೆ
ಯಲ್ಲಿದ್ದ ಅಪರಿಚಿತರ ವ್ಯಾಜ್ಯವನ್ನು ವಿಚಾರಿಸು
ತ್ತಿದ್ದೆನು.
17 ನಾನು ದುಷ್ಟರ ಕೋರೆಗಳನ್ನು ಮುರಿದು ಅವರ
ಬಾಯೊಳಗಿಂದ ಬೇಟೆಗಳನ್ನು ರಕ್ಷಿಸುತ್ತಿದ್ದೆನು.
18 ‘‘ನನ್ನ ಬಗ್ಗೆ ಆಲೋಚಿಸುತ್ತಾ ನನ್ನ ದಿನಗಳು
ಮರಳಿನ ಕಣಗಳಷ್ಟು ಅಸಂಖ್ಯಾತವಾಗಿವೆ; ನಾನು
ನನ್ನ ಸ್ವಂತ ಮನೆಯಲ್ಲಿ ಮರಣಹೊಂದುವೆನು.
19 ನನ್ನ ಬೇರುಗಳು ನೀರಿನವರೆಗೂ ವ್ಯಾಪಿಸಿ
ಕೊಂಡಿರುತ್ತವೆ; ನನ್ನ ಕೊಂಬೆಗಳು ಇಬ್ಬನಿಯಿಂದ
ಹಸಿಯಾಗಿರುತ್ತವೆ;
20 ಜನರು ನನ್ನನ್ನು ಹೊಗಳುತ್ತಲೇ ಇರುವರು;
ಕೈಯಲ್ಲಿ ಹೊಸಬಿಲ್ಲು ಇರುವಂತೆ ನಾನು ಬಲಿಷ್ಠ
ನಾಗಿದ್ದೇನೆ’ ಎಂದುಕೊಂಡೆನು.
21 ‘‘ಆ ದಿನಗಳಲ್ಲಿ ಜನರು ನನಗೆ ಕಿವಿಗೊಡುತ್ತಿದ್ದರು;
ನನ್ನ ಆಲೋಚನೆಯನ್ನು ಕೇಳಲು ಮೌನದಿಂದ
ಕಾದುಕೊಂಡಿರುತ್ತಿದ್ದರು.
22 ನನ್ನ ಭಾಷಣವು ಪರಿಪೂರ್ಣವಾಗಿದ್ದ ಕಾರಣ
ಅದಕ್ಕೆ ಬೇರೇನೂ ಸೇರಿಸಲು ಅವರಿಗೆ ಸಾಧ್ಯ
ವಿರಲಿಲ್ಲ. ನನ್ನ ಮಾತುಗಳು ಅವರ ಕಿವಿಗಳಿಗೆ
ಕೋಮಲವಾಗಿದ್ದವು.
23 ಮಳೆಗಾಗಿಯೋ ಎಂಬಂತೆ ಅವರು ನನ್ನ ಮಾತು
ಗಳಿಗಾಗಿ ಕಾದುಕೊಂಡಿರುತ್ತಿದ್ದರು. ವಸಂತ ಕಾಲ
ದಲ್ಲಿ ಬೀಳುವ ಮಳೆಯ ನೀರನ್ನೋ ಎಂಬಂತೆ
ಅವರು ನನ್ನ ಮಾತುಗಳನ್ನು ಕುಡಿಯುತ್ತಿದ್ದರು.
24 ನಾನು ಅವರನ್ನು ಕಂಡು ಮುಗುಳ್ನಗೆ ಬೀರಿದಾಗ
ಅವರಿಗೆ ನಂಬುವುದಕ್ಕೇ ಆಗುತ್ತಿರಲಿಲ್ಲ. ನನ್ನ
ಸಂತೋಷದ ಮುಖವು ಅವರನ್ನು ಪ್ರೋತ್ಸಾಹ
ಗೊಳಿಸಿತು.
25 ನಾನು ನಾಯಕನಾಗಿದ್ದರೂ ಅವರೊಂದಿಗೇ
ಇರುತ್ತಿದ್ದೆನು; ಪಾಳೆಯದಲ್ಲಿ ಸೈನ್ಯಗಳೊಂದಿಗಿರುವ
ರಾಜನಂತೆ ನಾನು ದುಃಖಿತರನ್ನು ಆದರಿಸುತ್ತಿದ್ದೆನು.
30 ಈಗಲಾದರೋ ನನಗಿಂತ ಚಿಕ್ಕವರೂ
ನನ್ನನ್ನು ಗೇಲಿಮಾಡುತ್ತಾರೆ. ಅವರ ತಂದೆ
ಗಳನ್ನು ಕುರಿಕಾಯುವ ನಾಯಿಗಳಿಗೂ ಯೋಗ್ಯ
ರಲ್ಲವೆಂದು ತಳ್ಳಿಬಿಟ್ಟಿದ್ದೆನು.
2 ಆ ಯೌವನಸ್ಥರ ತಂದೆಗಳಿಗೆ ನನ್ನಲ್ಲಿ ಕೆಲಸ
ಮಾಡುವಷ್ಟು ಬಲವಿರಲಿಲ್ಲ. ಅವರು ಮುದುಕ
ರಾಗಿದ್ದರು; ತ್ರಾಣವಿಲ್ಲದವರಾಗಿದ್ದರು.
3 ಆ ಮನುಷ್ಯರು ಬಡಕಲಾಗಿದ್ದರು; ತಿನ್ನಲಿಕ್ಕಿಲ್ಲದೆ
ಹಸಿವೆಯಿಂದಿದ್ದರು; ಅಡವಿಯ ಒಣಧೂಳನ್ನು
ತಿನ್ನುತ್ತಿದ್ದರು,
4 ಅವರು ಮರುಭೂಮಿಯಲ್ಲಿ ಉಪ್ಪುಸಸಿಗಳನ್ನು
ಕೀಳುತ್ತಿದ್ದರು; ಕುರುಚಲು ಮರದ ಬೇರುಗಳನ್ನು
ತಿನ್ನುತ್ತಿದ್ದರು.
5 ಅವರನ್ನು ಬೇರೆಯವರು ಬಲವಂತದಿಂದ ಹೊರ
ಗಟ್ಟುತ್ತಿದ್ದರು. ಕಳ್ಳರನ್ನೋ ಎಂಬಂತೆ ಜನರು
ಅವರನ್ನು ಕಂಡು ಕೂಗಿಕೊಳ್ಳುತ್ತಿದ್ದರು.
6 ಆ ಮುದುಕರು ನದಿಯ ದಂಡೆಗಳಲ್ಲಿಯೂ ನೆಲದ
ಕುಳಿಗಳಲ್ಲಿಯೂ ಗುಹೆಗಳಲ್ಲಿಯೂ ವಾಸಿಸುತ್ತಿ
ದ್ದರು.
7 ಅವರು ಪೊದೆಗಳಲ್ಲಿ ಕಾಡುಕತ್ತೆಗಳಂತೆ ಅರಚು
ತ್ತಿದ್ದರು; ಮುಳ್ಳುಗಿಡಗಳ ಕೆಳಗೆ ಕೂಡಿ
ಕೊಳ್ಳುತ್ತಿದ್ದರು.
8 ಅಯೋಗ್ಯರಾಗಿದ್ದ ಈ ಗುಂಪಿನವರು ದೇಶ ಭ್ರಷ್ಟ
ರಾಗಿದ್ದರು.
9 ‘‘ಈಗಲಾದರೋ ಅವರ ಗಂಡುಮಕ್ಕಳು ನನ್ನ
ಮೇಲೆ ಗೇಲಿ ಹಾಡುಗಳನ್ನು ಕಟ್ಟುವರು; ನನ್ನ
ಹೆಸರು ಅವರಿಗೆ ಹಾಸ್ಯವಾಯಿತು.
10 ಆ ಯೌವನಸ್ಥರು ನನ್ನನ್ನು ಕಂಡು ಅಸಹ್ಯ
ಪಡುತ್ತಾರೆ; ನನ್ನಿಂದ ದೂರನಿಲ್ಲುತ್ತಾರೆ. ನನ್ನ
ಮುಖದ ಮೇಲೆ ಉಗುಳುವುದಕ್ಕೂ ಅವರು
ಹಿಂದೆಗೆಯರು!
11 ದೇವರು ನನ್ನ ಬಿಲ್ಲಿನ ತಂತಿಯನ್ನು ಕಿತ್ತು ನನ್ನನ್ನು
ಬಲಹೀನಗೊಳಿಸಿದ್ದಾನೆ. ಆ ಯೌವನಸ್ಥರು ಕಡಿ
ವಾಣವಿಲ್ಲದವರಾಗಿ ಕೋಪದಿಂದ ನನಗೆ
ವಿರೋಧವಾಗಿ ಎದ್ದಿದ್ದಾರೆ.
12 ಅವರು ನನ್ನ ಬಲಗಡೆಯಲ್ಲಿ ಎದ್ದು ನನ್ನ ಕಾಲು
ಗಳನ್ನು ಹಿಂದಕ್ಕೆ ನೂಕಿ ನನ್ನನ್ನು ನಾಶಮಾಡಲು
ದಿಬ್ಬಹಾಕಿದ್ದಾರೆ.
13 ನಾನು ತಪ್ಪಿಸಿಕೊಂಡು ಹೋಗುವ ದಾರಿಯನ್ನು ಆ
ಯೌವನಸ್ಥರು ಕಾಯುತ್ತಿದ್ದಾರೆ. ನನ್ನನ್ನು ನಾಶ
ಮಾಡುವುದರಲ್ಲಿ ಅವರು ಯಶಸ್ವಿಯಾಗುವರು.
ಅವರಿಗೆ ವಿರುದ್ಧವಾಗಿ ನನಗೆ ಸಹಾಯಮಾಡಲು
ಯಾರೂ ಇಲ್ಲ.
14 ಅವರು ಗೋಡೆಯನ್ನು ಒಡೆದು ನುಗ್ಗಿ ಬರಲು
ಕಲ್ಲುಗಳು ನನ್ನ ಮೇಲೆ ಬೀಳುವವು.
15 ನಾನು ಭಯದಿಂದ ನಡುಗುತ್ತಿರುವೆ. ಗಾಳಿಯು
ವಸ್ತುಗಳನ್ನು ಕೊಚ್ಚಿಕೊಂಡು ಹೋಗುವಂತೆ ಆ
ಯೌವನಸ್ಥರು ನನ್ನ ಮಾನವನ್ನು ಅಟ್ಟಿಬಿಡುವರು.
ನನ್ನ ಸುರಕ್ಷತೆಯು ಮೋಡದಂತೆ ಕಾಣದೆ
ಹೋಗುವುದು.

16 “ಈಗ ನನ್ನ ಜೀವಿತವು ಕೊನೆಗೊಂಡಿದೆ; ಸಾವು
ಸಮೀಪವಾಗಿದೆ. ಸಂಕಟದ ದಿನಗಳು ನನ್ನನ್ನು
ಹಿಡಿದುಕೊಂಡಿವೆ.
17 ರಾತ್ರಿಯಲ್ಲಿ ನನ್ನ ಎಲುಬುಗಳೆಲ್ಲಾ ನೋಯುತ್ತವೆ.
ನನ್ನನ್ನು ಕಚ್ಚುತ್ತಿರುವ ನೋವು ನಿಲ್ಲುವುದೇ ಇಲ್ಲ.
18 ದೇವರು ನನ್ನ ಮೇಲಂಗಿಯ ಕೊರಳಪಟ್ಟಿಯನ್ನು
ಹಿಡಿದು ನನ್ನ ಬಟ್ಟೆಯನ್ನು ತಿರುವಿಬಿಟ್ಟಿದ್ದಾನೆ.
19 ದೇವರು ನನ್ನನ್ನು ಮಣ್ಣಿಗೆ ಎಸೆದುಬಿಟ್ಟಿದ್ದಾನೆ,
ನಾನು ಧೂಳಿನಂತೆಯೂ ಬೂದಿಯಂತೆಯೂ ಆಗಿ
ದ್ದೇನೆ.
20 “ದೇವರೇ, ನಾನು ಸಹಾಯಕ್ಕಾಗಿ ನಿನಗೆ ಮೊರೆ
ಯಿಡುವೆನು, ಆದರೆ ನೀನು ಉತ್ತರಿಸುವುದಿಲ್ಲ.
ನಾನು ಎದ್ದುನಿಂತು ಪ್ರಾರ್ಥಿಸಿದರೂ ನೀನು ನನಗೆ
ಗಮನಕೊಡುವುದಿಲ್ಲ.
21 ದೇವರೇ, ನೀನು ನನ್ನ ಪಾಲಿಗೆ ಕ್ರೂರನಾಗಿಬಿಟ್ಟೆ
. ನಿನ್ನ ಶಕ್ತಿಯಿಂದ ನನ್ನನ್ನು ನೋಯಿಸುತ್ತಿರುವೆ.
22 ದೇವರೇ, ನನ್ನನ್ನು ಕೊಚ್ಚಿಕೊಂಡು ಹೋಗಲು
ನೀನು ಬಿರುಗಾಳಿಗೆ ಅವಕಾಶಕೊಟ್ಟೆ. ನೀನು
ನನ್ನನ್ನು ಎತ್ತಿ ಬಿರುಗಾಳಿಗೆ ಎಸೆದುಬಿಟ್ಟೆ.
23 ನೀನು ನನ್ನನ್ನು ಮರಣಕ್ಕೀಡು ಮಾಡಿರುವುದು
ನನಗೆ ಗೊತ್ತಿದೆ. ಜೀವಿಸಿರುವ ಪ್ರತಿಯೊಬ್ಬನೂ
ಸಾಯಲೇಬೇಕು.
24 “ಆದರೆ ಈಗಾಗಲೇ ನಾಶವಾಗಿ ಸಹಾಯಕ್ಕಾಗಿ
ಕೂಗಿಕೊಳ್ಳುವವನಿಗೆ ಯಾರೂ ಕೇಡು ಮಾಡುವು
ದಿಲ್ಲ.
25 ದೇವರೇ, ಕಷ್ಟದಲ್ಲಿರುವವರಿಗಾಗಿ ನಾನು ಅತ್ತದ್ದು
ನಿನಗೆ ಗೊತ್ತದೆ. ಬಡವರಿಗೋಸ್ಕರ ನನ್ನ ಹೃದ
ಯವು ಬಹು ದುಃಖಗೊಂಡದ್ದು ನಿನಗೆ ತಿಳಿದದೆ.
26 ಆದರೆ ನಾನು ಒಳ್ಳೆಯವುಗಳನ್ನು ನಿರೀಕ್ಷಿಸುತ್ತಿದ್ದಾಗ
ನನಗೆ ಕೇಡುಗಳೇ ಆದವು. ನಾನು ಬೆಳಕಿಗಾಗಿ
ಎದುರು ನೋಡುತ್ತಿದ್ದಾಗ ನನಗೆ ಕತ್ತಲಾಯಿತು.
27 ನನ್ನ ಅಂತರಂಗವು ಕುದಿಯುತ್ತಿದೆ; ಸಂಕಟವು ನಿಲ್ಲು
ತ್ತಲೇ ಇಲ್ಲ. ಸಂಕಟವು ಈಗ ತಾನೆ ಆರಂಭ
ಗೊಂಡಿದೆ.
28 ನಾನು ದುಃಖಿತನೂ ಕುಂದಿಹೋದವನೂ
ಆಗಿರುವೆ; ನನಗೆ ಉಪಶಮನವೇ ಇಲ್ಲ. ನಾನು
ಸಭೆಯಲ್ಲಿ ನಿಂತುಕೊಂಡು ಸಹಾಯಕ್ಕಾಗಿ
ಕೂಗುತ್ತಿರುವೆ.
29 ನಾನು ನರಿಗಳಂತೆಯೂ ಉಷ್ಟ್ರಪಕ್ಷಿಗಳಂತೆಯೂ
ಒಬ್ಬಂಟಿಗನಾಗಿರುವೆ.
30 ನನ್ನ ಚರ್ಮವು ಕಡುಕಪ್ಪಾಗಿದೆ. ನನ್ನ ದೇಹವು
ಜ್ವರದಿಂದ ಬಿಸಿಯಾಗಿದೆ.
31 ಶೋಕ ಗೀತೆಗಳನ್ನು ನುಡಿಸಲು ನನ್ನ ಹಾರ್ಪ್
ವಾದ್ಯವನ್ನು ಶ್ರುತಿಮಾಡಲಾಗಿದೆ. ನನ್ನ ಕೊಳಲು
ಅಳುವವರಿಗೆ ತಕ್ಕಂತೆ ನುಡಿಯುತ್ತದೆ.

31 “ಯುವತಿಯನ್ನು ಕಾಮುದಾಶೆಯಿಂದ
ನೋಡುವುದಿಲ್ಲವೆಂದು ನನ್ನ ಕಣ್ಣುಗ
ಳೊಂದಿಗೆ ಒಪ್ಪಂದ ಮಾಡಿಕೊಂಡಿದ್ದೇನೆ.
2 ಸರ್ವಶಕ್ತನಾದ ದೇವರು ಜನರಿಗೆ ಏನು ಮಾಡು
ವನು? ದೇವರು ತನ್ನ ಉನ್ನತವಾದ ಪರಲೋಕ
ದಿಂದ ಜನರಿಗೆ ಹೇಗೆ ಪ್ರತಿಫಲವನ್ನು ಕೊಡು
ವನು?
3 ದೇವರು ದುಷ್ಟರಿಗೆ ತೊಂದರೆಯನ್ನೂ ನಾಶನ
ವನ್ನೂ ತಪ್ಪಿತಸ್ಥರಿಗೆ ವಿಪತ್ತನ್ನೂ ಕಳುಹಿಸುವನು.
4 ನಾನು ಮಾಡುವ ಪ್ರತಿಯೊಂದು ದೇವರಿಗೆ ಗೊತ್ತು
ಮತ್ತು ನಾನಿಡುವ ಪ್ರತಿಯೊಂದು ಹೆಜ್ಜೆಯನ್ನೂ
ಆತನು ಗಮನಿಸುವನು.”
5 “ನಾನು ಸುಳ್ಳು ಹೇಳಲಿಲ್ಲ; ಜನರಿಗೆ ಮೋಸ
ಮಾಡಲು ಪ್ರಯತ್ನಿಸಲೂ ಇಲ್ಲ.
6 ದೇವರು ನ್ಯಾಯವಾದ ಅಳತೆಮಾನಗಳಿಂದ
ನನ್ನನ್ನು ತೂಗಿದರೆ, ನಾನು ನಿರಪರಾಧಿಯೆಂದು
ಆತನಿಗೆ ಗೊತ್ತಾಗುವುದು.
7 ನಾನು ನೀತಿಮಾರ್ಗವನ್ನು ಬಿಟ್ಟು ಹೋಗಿದ್ದರೆ ನನ್ನ
ಕಣ್ಣುಗಳು ನನ್ನ ಹೃದಯವನ್ನು ಕೆಟ್ಟದ್ದಕ್ಕೆ ನಡೆಸಿದ್ದರೆ
ನನ್ನ ಕೈಗಳು ಪಾಪದಿಂದ ಕೊಳಕಾಗಿದ್ದರೆ
8 ನಾನು ಬಿತ್ತಿ ಬೆಳೆಸಿದ ಬೆಳೆಗಳನ್ನು ಬೇರೆಯವರು
ತಿನ್ನಲಿ; ನಾನು ಬೆಳೆಸಿದ ಸಸಿಗಳು ಕೀಳಲ್ಪಡಲಿ.
9 “ನಾನು ಪರಸ್ತ್ರೀಯಲ್ಲಿ ಮರುಳುಗೊಂಡಿದ್ದರೆ, ನನ್ನ
ನೆರೆಯವನ ಹೆಂಡತಿಯೊಂದಿಗೆ ವ್ಯಭಿಚಾರ
ಮಾಡಲು ಅವನ ಮನೆಯ ಬಾಗಿಲಲ್ಲಿ ಕಾದು
ಕೊಂಡಿದ್ದರೆ,
10 ನನ್ನ ಹೆಂಡತಿಯು ಬೇರೊಬ್ಬನಿಗೆ ಸೇವಕಿಯಾಗಲಿ;
ಬೇರೆಯವರು ಆಕೆಯೊಂದಿಗೆ ಮಲಗಿಕೊಳ್ಳಲಿ.
11 ಯಾಕಂದರೆ ವ್ಯಭಿಚಾರ ಅವಮಾನಕರ. ಆ ಪಾಪಕ್ಕೆ
ದಂಡನೆಯಾಗಲೇಬೇಕು.
12 ವ್ಯಭಿಚಾರವು ಸುಟ್ಟುನಾಶಮಾಡುವ ಬೆಂಕಿ
ಯಂತಿದೆ. ನಾನು ಹೊಂದಿರುವ ಪ್ರತಿಯೊಂದನ್ನು
ಅದು ನಾಶಮಾಡಿಬಿಡುತ್ತಿತ್ತು.
13 “ನನ್ನ ಸೇವಕ ಸೇವಕಿಯರು ನನಗೆ ವಿರೋಧವಾಗಿ
ದೂರನ್ನು ಹೊಂದಿದ್ದಾಗ ನಾನು ಅವರಿಗೆ ನ್ಯಾಯ
ವನ್ನು ದೊರಕಿಸಿಲ್ಲದಿದ್ದರೆ.
14 ದೇವರು ನನ್ನನ್ನು ಮುಖಾಮುಖಿಯಾಗಿ ಸಂಧಿಸು
ವಾಗ ನಾನೇನು ಮಾಡಲಿ? ನಾನು ಮಾಡಿದ್ದಕ್ಕೆ

ವಿವರಣೆ ಕೊಡುವಂತೆ ದೇವರು ನನ್ನನ್ನು ಕರೆಯು
ವಾಗ ನಾನೇನು ಉತ್ತರಕೊಡಲಿ?
15 ದೇವರು ನನ್ನನ್ನು ನನ್ನ ತಾಯಿಯ ಗರ್ಭದಲ್ಲಿ
ನಿರ್ಮಿಸಿದನು. ದೇವರು ನನ್ನ ಸೇವಕ ಸೇವಕಿಯ
ರನ್ನೂ ನಿರ್ಮಿಸಿದನು. ದೇವರು ನಮ್ಮೆಲ್ಲರನ್ನು
ನಮ್ಮ ತಾಯಂದಿರ ಗರ್ಭಗಳಲ್ಲಿ ರೂಪಿಸಿದನು.
16 ''ಬಡಜನರಿಗೆ ಸಹಾಯಮಾಡಲು ನಾನೆಂದೂ
ನಿರಾಕರಿಸಲಿಲ್ಲ; ವಿಧವೆಯರಿಗೆ ಬೇಕಾದದ್ದನ್ನೆಲ್ಲ
ನಾನು ಒದಗಿಸಿಕೊಟ್ಟೆನು.
17 ನಾನು ಸ್ವಾರ್ಥದಿಂದ ನನ್ನ ಆಹಾರವನ್ನು ಎಂದೂ
ಇಟ್ಟುಕೊಳ್ಳಲಿಲ್ಲ. ಅನಾಥರು ಹಸಿವೆಯಿಂದಿರಲು
ನಾನೆಂದೂ ಅವಕಾಶಕೊಟ್ಟಿಲ್ಲ.
18 ನಾನು ನನ್ನ ಜೀವಮಾನವೆಲ್ಲಾ, ಅನಾಥರಿಗೆ ತಂದೆ
ಯಂತಿದ್ದೆನು; ವಿಧವೆಯರನ್ನು ಪರಿಪಾಲಿಸಿದೆನು.
19 ಬಟ್ಟೆಯಿಲ್ಲದೆ ಸಂಕಟಪಡುತ್ತಿರುವವರನ್ನೂ
ಮೇಲಂಗಿಯಿಲ್ಲದ ಬಡವರನ್ನೂ ನಾನು ಕಂಡಾ
ಗಲೆಲ್ಲಾ
20 ಅವರಿಗೆ ಬಟ್ಟೆಗಳನ್ನು ಕೊಟ್ಟೆನು. ನನ್ನ ಕುರಿಗಳ
ಉಣ್ಣೆಯಿಂದ ಅವರ ಮೈಯನ್ನು ಬೆಚ್ಚಗೆ ಮಾಡಿ
ದೆನು. ಅವರು ನನ್ನನ್ನು ಪೂರ್ಣಹೃದಯದಿಂದ
ಆಶೀರ್ವದಿಸಿದರು.
21 ನಗರ ದ್ವಾರದ ಬಳಿ ಬಿಕ್ಷೆಬೇಡುವ ಅನಾಥರನ್ನು
ಕಂಡು ನಾನೆಂದೂ ಅವರ ಮೇಲೆ ಕೈ ಮಾಡಲಿಲ್ಲ.
22 ನಾನು ಹಾಗೆ ಮಾಡಿದ್ದರೆ, ನನ್ನ ತೋಳು ಕೀಲಿ ತಪ್ಪಿ
ಭುಜದಿಂದ ಮುರಿದುಬೀಳಲಿ.
23 ನಾನು ಆ ಕೆಟ್ಟಕಾರ್ಯಗಳಲ್ಲಿ ಯಾವುದನ್ನೂ
ಮಾಡಲಿಲ್ಲ. ಯಾಕಂದರೆ ನಾನು ದೇವರ ಶಿಕ್ಷೆಗೆ
ಹೆದರಿಕೊಂಡಿದ್ದೆ. ಆತನ ವೈಭವದ ಎದುರಿನಲ್ಲಿ
ನಿಂತುಕೊಳ್ಳಲು ನನಗಾಗಲಿಲ್ಲ.
24 ''ನಾನು ನನ್ನ ಐಶ್ವರ್ಯಗಳಲ್ಲಿ ಎಂದೂ ಬರವಸ
ವಿಡಲಿಲ್ಲ. ನಾನು ಬಂಗಾರಕ್ಕೆ 'ನೀನೇ ನನ್ನ
ನಿರೀಕ್ಷೆ' ಎಂದು ಹೇಳಲೇ ಇಲ್ಲ.
25 ನನ್ನ ಐಶ್ವರ್ಯದಿಂದಲೂ ನಾನು ಗರ್ವಿಷ್ಠನಾಗ
ಲಿಲ್ಲ. ನಾನು ಗಳಿಸಿದ ಅಪಾರ ಹಣವೂ ನನ್ನನ್ನು
ಉಲ್ಲಾಸಪಡಿಸಲಿಲ್ಲ.
26 ಪ್ರಕಾಶಮಾನವಾದ ಸೂರ್ಯನನ್ನಾಗಲೀ ಸುಂದರ
ವಾದ ಚಂದ್ರನನ್ನಾಗಲೀ ನಾನೆಂದೂ ಪೂಜಿಸಲಿಲ್ಲ.
27 ನಾನು ಮರುಳುಗೊಂಡು ನನ್ನ ಕೈಗೆ ಮುದ್ದಿಡು
ವುದರ ಮೂಲಕ ಸೂರ್ಯಚಂದ್ರರನ್ನು ಪೂಜಿಸ
ಲಿಲ್ಲ.
28 ನಾನು ಅವುಗಳಲ್ಲಿ ಯಾವುದನ್ನೇ ಮಾಡಿದ್ದರೂ
ನನಗೆ ಶಿಕ್ಷೆಯಾಗುತ್ತಿತ್ತು. ಯಾಕಂದರೆ ಆಗ ನಾನು
ಸರ್ವಶಕ್ತನಾದ ದೇವರಿಗೆ ಅಪನಂಬಿಗಸ್ತನಾಗುತ್ತಿ
ದ್ದೆನು.
29 'ನನ್ನ ವೈರಿಗಳು ನಾಶವಾದಾಗ, ನಾನೆಂದೂ
ಸಂತೋಷಪಡಲಿಲ್ಲ. ನನ್ನ ವೈರಿಗಳಿಗೆ ಕೇಡಾದಾಗ
ನಾನೆಂದೂ ನಗಲಿಲ್ಲ.
30 ನನ್ನ ವೈರಿಗಳನ್ನು ಶಪಿಸಿ ಅವರಿಗೆ ಸಾವನ್ನು
ಕೋರಲು ನಾನೆಂದೂ ನನ್ನ ಬಾಯಿಗೆ ಅವಕಾಶ
ಕೊಡಲಿಲ್ಲ.
31 ನಾನು ಅಪರಿಚಿತರಿಗೆ ಯಾವಾಗಲೂ ಊಟ
ಕೊಟ್ಟದ್ದು ನನ್ನ ಮನೆಯಲ್ಲಿರುವ ಎಲ್ಲರಿಗೂ
ಗೊತ್ತಿದೆ.
32 ನಾನು ಅಪರಿಚಿತರನ್ನು ನನ್ನ ಮನೆಗೆ ಯಾವಾಗಲೂ
ಆಹ್ವಾನಿಸುತ್ತಿದ್ದೆನು. ಆದ್ದರಿಂದ ರಾತ್ರಿಯಲ್ಲಿ
ಅವರು ಬೀದಿಗಳಲ್ಲಿ ಮಲಗಿಕೊಳ್ಳಬೇಕಾಗಿರಲಿಲ್ಲ.
33 ಬೇರೆಯವರು ತಮ್ಮ ಪಾಪಗಳನ್ನು ಮರೆಮಾಡಲು
ಪ್ರಯತ್ನಿಸಬಹುದು. ಆದರೆ ನಾನು ನನ್ನ ಯಾವ
ಪಾಪವನ್ನೂ ಮರೆಮಾಡಲಿಲ್ಲ.
34 ಜನರ ಮಾತಿಗೆ ನಾನೆಂದೂ ಭಯಗೊಂಡಿರಲಿಲ್ಲ.
ಯಾವ ಕುಟುಂಬದ ಅಸಮ್ಮತಿಗೂ ನಾನೆಂದೂ
ಹೆದರಿಕೊಂಡಿರಲಿಲ್ಲ. ಅಂಥ ಯಾವ ಭಯವೂ
ನನ್ನನ್ನು ಮೌನಗೊಳಿಸಿ ಮನೆಯೊಳಗಿರಿಸಲಿಲ್ಲ.
ಯಾಕಂದರೆ ನನ್ನ ಮೇಲೆ ಜನರಿಗಿರುವ ದ್ವೇಷಕ್ಕೆ
ನಾನು ಹೆದರಿಕೊಂಡಿರಲಿಲ್ಲ.
35 ''ಅಯ್ಯೋ ನನಗೆ ಕಿವಿಗೊಡುವುದಕ್ಕೆ ಯಾರಾದ
ರೊಬ್ಬರು ಇರಬೇಕಿತ್ತು! ನಾನು ಸತ್ಯವನ್ನೇ
ಹೇಳಿದೆನೆಂಬುದಕ್ಕೆ ಇದೋ, ಇಲ್ಲಿದೆ ನನ್ನ ಸಹಿ!
ಸರ್ವಶಕ್ತನಾದ ದೇವರು ನನಗೆ ಉತ್ತರಕೊಡಲಿ.
ನನ್ನ ಮೇಲೆ ಅಪವಾದ ಹೊರಿಸುವವನು,
ಆಪಾದನೆಯ ಪತ್ರವನ್ನು ಕೊಡಲಿ!
36 ಖಂಡಿತವಾಗಿಯೂ ನಾನು ಆ ಪತ್ರವನ್ನು ನನ್ನ
ಹೆಗಲ ಮೇಲೆ ಇಟ್ಟುಕೊಳ್ಳುವೆನು. ಅದನ್ನು ಕಿರೀಟ
ವನ್ನಾಗಿ ಧರಿಸಿಕೊಳ್ಳುವೆನು.
37 ನಾನು ಮಾಡಿರುವ ಪ್ರತಿಯೊಂದನ್ನು ದೇವರಿಗೆ
ವಿವರಿಸುವೆನು. ನಾನು ಅಧಿಪತಿಯಂತೆ ತಲೆಯೆತ್ತಿ
ಕೊಂಡು ದೇವರ ಸಮೀಪಕ್ಕೆ ಬರುವೆನು.
38 ''ನನ್ನ ಹೊಲವನ್ನು ಬೇರೆಯವರಿಂದ ಕಿತ್ತು
ಕೊಳ್ಳಲಿಲ್ಲ; ಈ ವಿಷಯದಲ್ಲಿ ಯಾರೂ ನನ್ನ
ಮೇಲೆ ಅಪವಾದ ಹೊರಿಸಲಾರರು.
39 ರೈತರಿಗೆ ಬೆಳೆಯಲ್ಲಿ ಪಾಲುಕೊಟ್ಟೆನು; ಬೇರೊಬ್ಬನ
ಜಮೀನನ್ನು ನಾನೆಂದೂ ಕಸಿದುಕೊಳ್ಳಲಿಲ್ಲ.
40 ಇವುಗಳಲ್ಲಿ ನಾನು ಯಾವುದನ್ನಾದರೂ ಮಾಡಿ
ದ್ದರೆ, ಗೋಧಿ ಮತ್ತು ಬಾರ್ಲಿಗಳ ಬದಲಾಗಿ ನನ್ನ

ಹೊಲಗಳಲ್ಲಿ ಮುಳ್ಳುಗಳೂ ಕಳೆಗಳೂ ಬೆಳೆಯಲಿ.''
ಹೀಗೆ ಯೋಬನ ಮಾತುಗಳು ಮುಗಿದವು.

### ಎಲೀಹುವಿನ ವಾದ

32 ಯೋಬನು ತಾನು ನಿರಪರಾಧಿಯೆಂದು
ನಂಬಿದ್ದರಿಂದ ಅವನ ಮೂವರು ಗೆಳೆಯರು
ಮತ್ತೆ ವಾದ ಮಾಡಲಿಲ್ಲ. 2 ಅಲ್ಲಿ ಎಲೀಹು ಎಂಬವನು
ಸಹ ಇದ್ದನು. ಎಲೀಹು ಬರಕೇಲನ ಮಗನು.
ಬರಕೇಲನು ಬೂಜ್ ಕುಲದವನು. ಎಲೀಹು ರಾಮ್
ಸಂತಾನಕ್ಕೆ ಸೇರಿದವನು. ಎಲೀಹುವಿಗೆ ಯೋಬನ ಮೇಲೆ
ಬಹು ಕೋಪಬಂದಿತು. ಯಾಕಂದರೆ ಯೋಬನು ತಾನು
ದೇವರಿಗಿಂತಲೂ ನೀತಿವಂತನೆಂದು ಪ್ರತಿಪಾದಿಸುತ್ತಿ
ದ್ದನು. 3 ಎಲೀಹುವಿಗೆ ಯೋಬನ ಮೂವರು ಸ್ನೇಹಿತರ
ಮೇಲೆಯೂ ಬಹು ಕೋಪ ಬಂದಿತು. ಯಾಕಂದರೆ
ಯೋಬನ ಪ್ರಶ್ನೆಗಳಿಗೆ ಪರಿಣಾಮಕಾರಿಯಾದ ಉತ್ತರ
ವನ್ನು ಕೊಟ್ಟು ಯೋಬನೇ ತಪ್ಪಿತಸ್ಥನೆಂದು ನಿರೂಪಿಸಲು
ಯೋಬನ ಮೂವರು ಗೆಳೆಯರಿಗೆ ಗೊತ್ತಿರಲಿಲ್ಲ. ಆದ
ಕಾರಣ, ದೇವರೇ ತಪ್ಪಿತಸ್ಥನೆಂದು ತೋರಿತು. 4 ಅಲ್ಲಿದ್ದವ
ರೆಲ್ಲರಲ್ಲಿ ಎಲೀಹು ಚಿಕ್ಕವನಾಗಿದ್ದನು. ಆದ್ದರಿಂದ ಪ್ರತಿ
ಯೊಬ್ಬರು ಮಾತಾಡಿ ಮುಗಿಸುವವರೆಗೆ ಅವನು ಕಾದು
ಕೊಂಡಿದ್ದನು. ಬಳಿಕ ಅವನಿಗೆ ತಾನೂ ಮಾತಾಡ
ಬಹುದೆನಿಸಿತು. 5 ಯೋಬನ ಮೂವರು ಸ್ನೇಹಿತರ
ಬಾಯಲ್ಲಿ ಉತ್ತರವಿಲ್ಲದಿರುವುದನ್ನು ಕಂಡು ಎಲೀಹು
ಕೋಪಗೊಂಡನು.

6 ಆದ್ದರಿಂದ ಎಲೀಹು ಮಾತಾಡಲಾರಂಭಿಸಿ
ಹೀಗೆಂದನು:

''ನಾನು ವಯಸ್ಸಿನಲ್ಲಿ ಚಿಕ್ಕವನು. ನೀವು ವೃದ್ಧರು. ಆದ
ಕಾರಣ, ನನ್ನ ಅಭಿಪ್ರಾಯವನ್ನು ನಿಮಗೆ ತಿಳಿಸಲು
ಹಿಂಜರಿದೆನು ಮತ್ತು ಹೆದರಿಕೊಂಡಿದ್ದೆನು.
7 'ವೃದ್ಧರು ಮೊದಲು ಮಾತಾಡಬೇಕು. ಅನೇಕ
ವರ್ಷಗಳ ಕಾಲ ಬದುಕಿದ ಜನರು ತಮ್ಮ ಜ್ಞಾನ
ವನ್ನು ಹಂಚಿಕೊಳ್ಳಬೇಕು' ಎಂದು ನಾನು
ನನ್ನೊಳಗೆ ಆಲೋಚಿಸಿಕೊಂಡೆನು.
8 ಆದರೆ ಮನುಷ್ಯರಲ್ಲಿರುವ ದೇವರಾತ್ಮನು ಅಂದರೆ
ಸರ್ವಶಕ್ತನಾದ ದೇವರ 'ಉಸಿರು' ಮನುಷ್ಯರಿಗೆ
ಜ್ಞಾನವನ್ನು ಕೊಡುತ್ತದೆ.
9 ವೃದ್ಧರು ಮಾತ್ರ ಜ್ಞಾನಿಗಳಲ್ಲ, ಕೇವಲ ವಯಸ್ಸಾ
ದವರು ಮಾತ್ರ ಯಾವುದು ಸರಿ ಎಂಬುದನ್ನು
ಅರ್ಥಮಾಡಿಕೊಳ್ಳುವವರಲ್ಲ.
10 ''ಆದಕಾರಣ ಎಲೀಹು ಎಂಬ ನಾನು ಹೇಳುವೆ,
ನನಗೆ ಕಿವಿಗೊಡಿರಿ! ನಾನು ಸಹ ನನ್ನ ಅಭಿ
ಪ್ರಾಯವನ್ನು ನಿಮಗೆ ತಿಳಿಸುವೆನು.
11 ನೀವು ಮಾತಾಡುತ್ತಿದ್ದಾಗ ನಾನು ತಾಳ್ಮೆಯಿಂದ
ಕಾದುಕೊಂಡಿದ್ದೆನು. ನೀವು ಹೇಳಲು ಪದಗಳಿಗಾಗಿ
ಆಲೋಚಿಸುತ್ತಿರುವಾಗ ನಾನು ನಿಮ್ಮ ವಾದಗಳನ್ನು
ಆಲಿಸಿದೆನು.
12 ನಾನು ನಿಮ್ಮ ಮಾತುಗಳನ್ನು ಬಹಳ ಎಚ್ಚರಿಕೆ
ಯಿಂದ ಗಮನವಿಟ್ಟು ಕೇಳಿದೆನು. ಆದರೆ
ಯೋಬನು ತಪ್ಪಿತಸ್ಥನೆಂಬುದನ್ನು ನೀವು ನಿರೂ
ಪಿಸಲಿಲ್ಲ. ನಿಮ್ಮಲ್ಲಿ ಒಬ್ಬರೂ ಯೋಬನ ವಾದ
ಗಳಿಗೆ ಉತ್ತರಕೊಡಲಿಲ್ಲ.
13 ನೀವು ಮೂವರು, 'ನಾವು ಜ್ಞಾನವನ್ನು ಕಂಡು
ಕೊಂಡಿದ್ದೇವೆ,' ಯೋಬನ ವಾದಗಳಿಗೆ ಉತ್ತರ
ವನ್ನು ದೇವರು ಕೊಡಬೇಕೇ ಹೊರತು ಮನು
ಷ್ಯರಲ್ಲ' ಎಂದು ಹೇಳಬೇಡಿ.
14 ಯೋಬನು ನನ್ನ ವಿರುದ್ಧವಾಗಿ ಹೇಳಿಕೆಗಳನ್ನು
ಹೊರಡಿಸಲಿಲ್ಲ. ಆದರೆ ನಾನು ಅವನಿಗೆ ನಿಮ್ಮ
ವಾದಗಳಿಂದ ಉತ್ತರ ನೀಡುವುದಿಲ್ಲ.
15 ''ಯೋಬನೇ, ನಿನ್ನ ಮೂವರು ಸ್ನೇಹಿತರು ಗಾಬರಿ
ಗೊಂಡಿದ್ದಾರೆ. ಹೆಚ್ಚಿಗೆ ಹೇಳಲು ಅವರಲ್ಲಿ ಏನೂ
ಉಳಿದಿಲ್ಲ. ಅವರಲ್ಲಿ ಯಾವ ಉತ್ತರಗಳೂ ಇಲ್ಲ.
16 ಈ ಮೂವರು ಮೌನವಾಗಿ ಅಲ್ಲಿ ನಿಂತಿದ್ದಾರೆ;
ಅವರಲ್ಲಿ ಉತ್ತರವಿಲ್ಲ. ಹೀಗಿರಲು ನಾನಿನ್ನೂ
ಕಾಯುತ್ತಲೇ ಇರಬೇಕೇ?
17 ಇಲ್ಲ! ನಾನು ಸಹ ನನ್ನ ಉತ್ತರವನ್ನು ಕೊಡುವೆನು.
ನಾನು ಸಹ ನನ್ನ ಅಭಿಪ್ರಾಯವನ್ನು ನಿನಗೆ
ತಿಳಿಸುವೆನು.
18 ಯಾಕಂದರೆ ನನ್ನಲ್ಲಿ ಹೇಳಲು ಬೇಕಾದಷ್ಟಿದೆ.
ನನ್ನೊಳಗಿರುವ ಆತ್ಮವು ಮಾತಾಡಲು ನನ್ನನ್ನು
ಒತ್ತಾಯಿಸುತ್ತಿದೆ
19 ಆಹಾ, ದ್ರಾಕ್ಷಾರಸವನ್ನು ತುಂಬಿ ಬಾಯಿಕಟ್ಟಿದ
ಹೊಸ ಬುದ್ದಲಿಯಂತೆ ನನ್ನ ಹೊಟ್ಟೆಯು ಒಡೆದು
ಹೋಗಲಿದೆ.
20 ಆದ್ದರಿಂದ ನಾನು ಮಾತಾಡಲೇಬೇಕು. ಆಗ ನನಗೆ
ಉಪಶಮನವಾಗುತ್ತದೆ. ನನ್ನ ತುಟಿಗಳನ್ನು ತೆರೆದು
ಯೋಬನ ದೂರುಗಳಿಗೆ ಉತ್ತರಕೊಡಲೇಬೇಕು.
21 ಈ ವಾದದಲ್ಲಿ ನಾನು ಮುಖದಾಕ್ಷಿಣ್ಯ ಮಾಡುವು
ದಿಲ್ಲ; ಯಾರ ಮುಖಸ್ತುತಿಯನ್ನೂ ಮಾಡುವುದಿಲ್ಲ.
22 ಮುಖಸ್ತುತಿಮಾಡುವುದೇ ನನಗೆ ತಿಳಿದಿಲ್ಲ. ಮುಖ
ಸ್ತುತಿಮಾಡುವುದು ನನಗೆ ಗೊತ್ತಿದ್ದರೆ, ದೇವರು
ನನ್ನನ್ನು ಬಹುಬೇಗನೆ ಶಿಕ್ಷಿಸುವನು.

33 ''ಈಗಲಾದರೋ ಯೋಬನೇ, ನನ್ನ ಸಂದೇ
ಶಕ್ಕೆ ಕಿವಿಗೊಡು. ನನ್ನ ಮಾತುಗಳಿಗೆ ಗಮನ
ಕೊಡು.

2 ಈಗ ನಾನು ನನ್ನ ಬಾಯಿ ತೆರೆಯುವೆನು. ನಾನು
ಮಾತಾಡಲು ಸಿದ್ಧನಾಗಿದ್ದೇನೆ.
3 ನನ್ನ ಹೃದಯವು ಯಥಾರ್ಥವಾಗಿದೆ. ಆದ್ದರಿಂದ
ನಾನು ಯಥಾರ್ಥವಾದ ಮಾತುಗಳನ್ನು ಹೇಳು
ವೆನು, ನನಗೆ ತಿಳಿದಿರುವ ಸಂಗತಿಗಳ ಬಗ್ಗೆ ಸತ್ಯವನ್ನು
ಹೇಳುವೆನು.
4 ದೇವರಾತ್ಮನು ನನ್ನನ್ನು ನಿರ್ಮಿಸಿದನು. ಸರ್ವಶಕ್ತ
ನಾದ ದೇವರ ಉಸಿರು ನನಗೆ ಜೀವವನ್ನು
ಕೊಟ್ಟಿತು.
5 ಯೋಬನೇ, ಕಿವಿಗೊಡು! ನಿನಗೆ ಸಾಧ್ಯವೆನಿಸಿದರೆ
ನನಗೆ ಉತ್ತರಕೊಡು. ನಿನ್ನ ವಾದವನ್ನು ಸಿದ್ಧ
ಪಡಿಸಿಕೋ. ನನ್ನೆದುರಿನಲ್ಲಿ ನಿನ್ನ ಪರವಾಗಿ
ಪ್ರತಿವಾದಿಸು!
6 ನೀನು ಮತ್ತು ನಾನು ದೇವರ ಎದುರಿನಲ್ಲಿ ಒಂದೇ
ರೀತಿಯಲ್ಲಿದ್ದೇವೆ. ದೇವರು ನಮ್ಮಿಬ್ಬರನ್ನು ಮಣ್ಣಿ
ನಿಂದ ನಿರ್ಮಿಸಿದನು.
7 ಯೋಬನೇ, ನನಗೆ ಭಯಪಡಬೇಡ. ನಾನು
ನಿನ್ನನ್ನು ಸೋಲಿಸುವುದಿಲ್ಲ.
8 ‘‘ಆದರೆ ಯೋಬನೇ, ನೀನು ಹೀಗೆ ಹೇಳುವುದನ್ನು
ನಾನು ಕೇಳಿದೆ:
9 ನೀನು ಹೀಗೆಂದು ಹೇಳಿದೆ: ‘ಯೋಬನಾದ ನಾನು
ಪರಿಶುದ್ಧನು; ನಾನು ನಿರಪರಾಧಿ; ನಾನು ಯಾವ
ತಪ್ಪನ್ನೂ ಮಾಡಲಿಲ್ಲ; ನಾನು ದೋಷಿಯಲ್ಲ!
10 ನಾನು ತಪ್ಪು ಮಾಡಿಲ್ಲದಿದ್ದರೂ ದೇವರು ನನಗೆ
ವಿರೋಧವಾಗಿದ್ದಾನೆ. ದೇವರು ನನ್ನನ್ನು ತನ್ನ
ವೈರಿಯೆಂದು ಪರಿಗಣಿಸಿದ್ದಾನೆ;
11 ದೇವರು ನನ್ನ ಕಾಲುಗಳಿಗೆ ಸರಪಣಿಯಿಂದ ಕಟ್ಟಿ
ದ್ದಾನೆ; ನಾನು ಮಾಡುವ ಪ್ರತಿಯೊಂದನ್ನೂ
ದೇವರು ಗಮನಿಸುತ್ತಿದ್ದಾನೆ.

12 ‘‘ಆದರೆ ಯೋಬನೇ, ಈ ವಿಷಯದಲ್ಲಿ ನೀನು
ತಪ್ಪಿತಸ್ಥನಾಗಿರುವೆ. ಯಾಕಂದರೆ ನಾನು ಅದನ್ನು
ನಿರೂಪಿಸುವೆ. ದೇವರು ಮನುಷ್ಯನಿಗಿಂತ
ದೊಡ್ಡವನು.
13 ಯೋಬನೇ, ನೀನು ದೇವರೊಂದಿಗೆ ವಾದಿಸು
ವುದೇಕೆ? ದೇವರು ನಿನಗೆ ಪ್ರತಿಯೊಂದನ್ನೂ
ವಿವರಿಸಬೇಕೆಂದು ಭಾವಿಸಿಕೊಂಡಿರುವೆಯೋ?
14 ಒಂದು ವೇಳೆ ದೇವರು ತನ್ನ ಕಾರ್ಯದ ಕುರಿತಾಗಿ
ವಿವರಿಸಬಹುದು. ಒಂದು ವೇಳೆ ನಮಗೆ ಅರ್ಥ
ವಾಗದ ರೀತಿಯಲ್ಲಿ ಆತನು ಮಾತಾಡಬಹುದು.
15-16 ಜನರು ಗಾಢನಿದ್ರೆಯಲ್ಲಿರುವಾಗ ದೇವರು
ಕನಸಿನ ಮೂಲಕವಾಗಲೀ ದರ್ಶನದ ಮೂಲಕ
ವಾಗಲೀ ಅವರ ಕಿವಿಗಳಲ್ಲಿ ಮಾತಾಡಬಹುದು.
ಆಗ ಅವರು ದೇವರ ಎಚ್ಚರಿಕೆಗಳಿಂದ ಬಹು
ಭಯಗೊಳ್ಳುವರು.
17 ಜನರು ತಪ್ಪು ಮಾಡಬಾರದೆಂದೂ ಅಹಂಕಾರಿ
ಗಳಾಗಿರಬಾರದೆಂದೂ ದೇವರು ಅವರಿಗೆ ಎಚ್ಚರಿಕೆ
ಕೊಡುತ್ತಾನೆ.
18 ಮರಣದ ಸ್ಥಳಕ್ಕೆ ಹೋಗುತ್ತಿರುವ ಜನರನ್ನು
ರಕ್ಷಿಸುವುದಕ್ಕಾಗಿ ದೇವರು ಎಚ್ಚರಿಕೆ ಕೊಡುತ್ತಾನೆ.
ನಾಶವಾಗುತ್ತಿರುವವನನ್ನು ರಕ್ಷಿಸುವುದಕ್ಕಾಗಿ
ದೇವರು ಎಚ್ಚರಿಸುತ್ತಾನೆ.
19 ‘‘ಇದಲ್ಲದೆ ಒಬ್ಬನು ದೇವರ ಶಿಕ್ಷೆಯಿಂದ ಹಾಸಿಗೆ
ಹಿಡಿದು ಸಂಕಟಪಡುತ್ತಿರುವಾಗ ದೇವರ ಸ್ವರಕ್ಕೆ
ಕಿವಿಗೊಟ್ಟರೂ ಕೊಡಬಹುದು. ದೇವರು ಅವ
ನನ್ನು ಎಲುಬುಗಳೆಲ್ಲಾ ಬಾಧಿಸುವಂಥ ನೋವಿ
ನಿಂದ ಎಚ್ಚರಿಸುತ್ತಾನೆ.
20 ಅವನಿಗೆ ಊಟಮಾಡಲೂ ಸಾಧ್ಯವಿಲ್ಲ. ಅವನು
ಅತ್ಯಧಿಕವಾದ ನೋವಿನಿಂದ ಬಳಲುತ್ತಿರುವುದ
ರಿಂದ ಮೃಷ್ಟಾನ್ನಕ್ಕೂ ಅಸಹ್ಯಪಡುವನು.
21 ಅವನು ಅಸ್ಥಿಪಂಜರದಂತೆ ಕ್ಷೀಣವಾಗುವನು.
22 ಅವನಿಗೆ ಸಾವು ಸಮೀಪವಾಗಿದೆ; ಅವನ ಜೀವವು
ಪಾತಾಳಕ್ಕೆ ಹತ್ತಿರವಾಗಿದೆ.

23 ‘‘ಒಂದು ವೇಳೆ ದೇವರ ದೂತರಲ್ಲೊಬ್ಬನು
ಮಧ್ಯಸ್ಥಗಾರನಾಗಿ ಬಂದು ಅವನ ನೀತಿಕಾರ್ಯ
ಗಳನ್ನು ದೃಢಪಡಿಸಿ ಅವನ ಮೇಲೆ ಪ್ರೀತಿ
ಯುಳ್ಳವನಾಗಿ,
24 ‘ಇವನನ್ನು ಪಾತಾಳದಿಂದ ರಕ್ಷಿಸು! ಇವನಿಗೋಸ್ಕರ
ಪ್ರಾಯಶ್ಚಿತ್ತದ ಮಾರ್ಗವೊಂದನ್ನು ಕಂಡುಕೊಂಡಿ
ದ್ದೇನೆ’ ಎಂದು ಹೇಳಿದರೆ
25 ಅವನ ದೇಹವು ಬಾಲ್ಯದಂತೆ ಕೋಮಲವಾಗು
ವುದು; ಯೌವನಪ್ರಾಯದಂತೆ ದೃಢಕಾಯವಾಗು
ವುದು.
26 ಆಗ ಆವನು ದೇವರಿಗೆ ಪ್ರಾರ್ಥಿಸಲು ಆತನು ಅವನ
ಪ್ರಾರ್ಥನೆಗೆ ಉತ್ತರಕೊಡುವನು. ಅವನು ಆನಂದ
ಧ್ವನಿಗೈದು ದೇವರನ್ನು ಆರಾಧಿಸುವನು; ನೀತಿವಂತ
ನಾಗಿ ಜೀವಿಸುವನು.
27 ಬಳಿಕ ಅವನು ಜನರ ಮುಂದೆ ನಿಂತುಕೊಂಡು,
‘ನಾನು ಪಾಪಮಾಡಿದೆನು; ಒಳ್ಳೆಯದನ್ನು ಕೆಟ್ಟದ್ದ
ನ್ನಾಗಿ ಮಾಡಿದೆನು. ಆದರೆ ದೇವರು ಅದಕ್ಕೆ ತಕ್ಕಂತೆ
ನನ್ನನ್ನು ದಂಡಿಸಲಿಲ್ಲ!
28 ದೇವರು ನನ್ನ ಆತ್ಮವನ್ನು ಪಾತಾಳಕ್ಕೆ ಹೋಗದಂತೆ
ರಕ್ಷಿಸಿದನು. ಆದ್ದರಿಂದ ನಾನು ಜೀವನದಲ್ಲಿ ಮತ್ತೆ

ಸುಖಪಡುವಂತಾಯಿತು' ಎಂದು ಅರಿಕೆಮಾಡಿ
ಕೊಳ್ಳುವನು.
29-30 "ಅವನನ್ನು ಎಚ್ಚರಿಸಿ ಅವನ ಆತ್ಮವನ್ನು ಪಾತಾಳ
ದಿಂದ ರಕ್ಷಿಸಬೇಕೆಂದೂ ಜೀವನದ ಸುಖವನ್ನು
ಅವನು ಮತ್ತೆ ಅನುಭವಿಸಲೆಂದೂ ದೇವರು ಈ
ಕಾರ್ಯಗಳನ್ನು ಪದೇಪದೇ ಮಾಡುವನು.
31 "ಯೋಬನೇ, ನನಗೆ ಗಮನಕೊಡು. ನನಗೆ ಕಿವಿ
ಗೊಡು. ಮೌನವಾಗಿರು; ಮತ್ತು ಮಾತಾಡಲು
ನನಗೆ ಅವಕಾಶಕೊಡು.
32 ಯೋಬನೇ, ನೀನು ಏನಾದರೂ ಹೇಳಬೇಕೆಂದಿ
ದ್ದರೆ, ಅದನ್ನು ನಾನು ಕೇಳುವಂತಾಗಲಿ. ಮುನ್ನ
ಡೆದು ಮಾತಾಡು, ಯಾಕಂದರೆ ನಿನ್ನನ್ನು ನೀತಿ
ವಂತನೆಂದು ಸ್ಥಾಪಿಸಲು ನನಗೆ ಸಂತೋಷ.
33 ಯೋಬನೇ, ಹೇಳುವುದಕ್ಕೆ ನಿನ್ನಲ್ಲಿ ಏನೂ ಇಲ್ಲ
ದಿದ್ದರೆ ನನಗೆ ಕಿವಿಗೊಟ್ಟು ಮೌನವಾಗಿರು. ನಾನು
ನಿನಗೆ ಜ್ಞಾನವನ್ನು ಬೋಧಿಸುವೆನು."

34 ಎಲೀಹು ತನ್ನ ಮಾತನ್ನು ಮುಂದು
ವರಿಸಿದನು:
2 'ಜ್ಞಾನಿಗಳೇ, ನನ್ನ ಮಾತುಗಳನ್ನು ಕೇಳಿರಿ.
ಜಾಣರೇ, ನನಗೆ ಗಮನಕೊಡಿರಿ.
3 ಕಿವಿಯು ಮಾತುಗಳನ್ನು ವಿವೇಚಿಸುತ್ತದೆ; ನಾಲಿ
ಗೆಯು ಆಹಾರವನ್ನು ರುಚಿನೋಡುತ್ತದೆ.
4 ಅಂತೆಯೇ ನಾವು ಈ ವಾದಗಳನ್ನು ಪರೀಕ್ಷಿಸಿ
ನ್ಯಾಯವಾದದ್ದನ್ನು ಆರಿಸಿಕೊಳ್ಳೋಣ.
5 ಯೋಬನು ಹೇಳುವುದೇನಂದರೆ, 'ನಾನು ನಿರಪ
ರಾಧಿ. ದೇವರು ನನಗೆ ನ್ಯಾಯದೊರಕಿಸುತ್ತಿಲ್ಲ.
6 ನಾನು ನೀತಿವಂತನಾಗಿದ್ದರೂ ಅಪರಾಧಿಯೆನಿಸಿ
ಕೊಂಡಿದ್ದೇನೆ. ನಾನು ನಿರ್ದೋಷಿಯಾಗಿದ್ದರೂ
ಆತನ ಬಾಣದ ಪೆಟ್ಟು ವಿಪರೀತವಾಗಿದೆ.'
7 "ಯೋಬನಿಗೆ ಸಮಾನನು ಯಾರು? ಅವನು
ನೀರು ಕುಡಿದಂತೆ ದೇವರನ್ನು ದೂಷಿಸುತ್ತಾನೆ.
8 ಯೋಬನು ದುಷ್ಟರೊಂದಿಗೆ ಸ್ನೇಹದಿಂದಿರುವನು;
ಕೆಟ್ಟವರ ಸಂಗಡ ನಡೆದಾಡುವನು.
9 ಯಾಕಂದರೆ, 'ದೇವರಿಗೆ ವಿಧೇಯನಾಗಿರುವವ
ನಿಗೆ ಅದರಿಂದ ಯಾವ ಪ್ರಯೋಜನವೂ ಇಲ್ಲ'
ಎಂದು ಅವನೇ ಹೇಳಿದ್ದಾನೆ.
10 "ಆದ್ದರಿಂದ ಬುದ್ಧಿವಂತರೇ, ನನ್ನ ಮಾತುಗಳಿಗೆ
ಕಿವಿಗೊಡಿ. ದೇವರು ಕೆಟ್ಟದ್ದನ್ನು ಎಂದಿಗೂ
ಮಾಡುವುದಿಲ್ಲ. ಸರ್ವಶಕ್ತನಾದ ದೇವರು
ಎಂದಿಗೂ ತಪ್ಪು ಮಾಡುವುದಿಲ್ಲ.
11 ಆತನು ಮನುಷ್ಯನಿಗೆ ಅವನ ಕೃತ್ಯಗಳಿಗೆ ತಕ್ಕಂತೆ
ಪ್ರತಿಫಲ ಕೊಡುವನು. ಪ್ರತಿಯೊಬ್ಬನು ತನ್ನ
ನಡತೆಗೆ ತಕ್ಕಂತೆ ದೇವರಿಂದ ಹೊಂದಿ
ಕೊಳ್ಳುವನು.
12 ಹೌದು, ನಿಜ, ದೇವರು ಕೆಟ್ಟದ್ದನ್ನು ಮಾಡುವುದಿಲ್ಲ;
ಸರ್ವಶಕ್ತನಾದ ದೇವರು ನೀತಿಯನ್ನು ಡೊಂಕು
ಮಾಡುವುದಿಲ್ಲ.
13 ಭೂಲೋಕಕ್ಕೆ ದೇವರನ್ನು ಅಧಿಪತಿಯನ್ನಾಗಿ
ಯಾರು ಆರಿಸಿಕೊಂಡರು? ಇಡೀ ಪ್ರಪಂಚದ
ಮೇಲಿನ ಜವಾಬ್ದಾರಿಯನ್ನು ದೇವರಿಗೆ ಯಾರು
ಕೊಟ್ಟರು?
14 ದೇವರು ತನ್ನ ಆತ್ಮವನ್ನೂ ಜೀವದ ಉಸಿರನ್ನೂ
ಜನರಿಂದ ತೆಗೆದುಕೊಳ್ಳುವುದಾದರೆ,
15 ಆಗ ಭೂಮಿಯ ಮೇಲಿರುವ ಎಲ್ಲಾ ಜನರು
ಜನರು ಸತ್ತು ಹೋಗಿ ಧೂಳಾಗುವರು.
16 "ನೀವು ವಿವೇಕಿಗಳಾಗಿದ್ದರೆ, ನನ್ನ ಮಾತುಗಳಿಗೆ
ಕಿವಿಗೊಡಿರಿ.
17 ನ್ಯಾಯವನ್ನು ದ್ವೇಷಿಸುವವನು ಅಧಿಪತಿಯಾಗು
ವನೇ? ಯೋಬನೇ, ಬಲಿಷ್ಠನೂ ಒಳ್ಳೆಯವನೂ
ಆಗಿರುವ ದೇವರನ್ನು ದೋಷಿಯೆಂಬುದಾಗಿ
ತೀರ್ಪುನೀಡಲು ನಿನಗೆ ಸಾಧ್ಯವೇ?
18 'ನೀವು ಅಯೋಗ್ಯರು!' ಎಂದು ರಾಜರುಗಳಿಗೆ
ಹೇಳು ವವನು ದೇವರೊಬ್ಬನೇ. 'ನೀವು ಕೆಡು
ಕರು!' ಎಂದು ನಾಯಕರುಗಳಿಗೆ ಹೇಳುವವನು
ದೇವರೇ.
19 ದೇವರಲ್ಲಿ ಸಾಮಾನ್ಯರು ಮತ್ತು ಪ್ರಮುಖರು
ಎಂದಾಗಲೀ ಬಡವರು ಮತ್ತು ಶ್ರೀಮಂತರು
ಎಂದಾಗಲೀ ಭೇದಭಾವವಿಲ್ಲ. ಯಾಕಂದರೆ ಎಲ್ಲ
ರನ್ನೂ ಸೃಷ್ಟಿಮಾಡಿದವನು ದೇವರೇ.
20 ಒಬ್ಬನು ಕ್ಷಣಮಾತ್ರದೊಳಗೆ ಮಧ್ಯ ರಾತ್ರಿಯಲ್ಲಿ
ಸಾಯಬಹುದು. ಜನರು ಕಾಯಿಲೆಯಿಂದ ಸಾಯ
ಬಹುದು. ದುಷ್ಟರು ಸಹ ಯಾವುದೇ ಕಾರಣವಿಲ್ಲದೆ
ಸಾಯಬಹುದು.
21 "ಮನುಷ್ಯರ ಕಾರ್ಯಗಳನ್ನು ದೇವರು ಗಮನಿಸು
ತ್ತಾನೆ. ಅವನ ಪ್ರತಿಯೊಂದು ಹೆಜ್ಜೆ ದೇವರಿಗೆ
ಗೊತ್ತಿದೆ.
22 ದುಷ್ಟನನ್ನು ದೇವರಿಂದ ಮರೆಮಾಡಬಲ್ಲ ಕತ್ತ
ಲೆಯ ಸ್ಥಳವಾಗಲೀ ಕಾರ್ಗತ್ತಲೆಯ ಸ್ಥಳವಾಗಲೀ
ಇಲ್ಲವೇ ಇಲ್ಲ.
23 ದೇವರು ಮನುಷ್ಯರನ್ನು ಪರೀಕ್ಷಿಸಲು ಸಮಯ
ವನ್ನು ಗೊತ್ತುಪಡಿಸಬೇಕಿಲ್ಲ; ನ್ಯಾಯತೀರ್ಪು
ನೀಡಲು ಅವರನ್ನು ತನ್ನ ಮುಂದೆ ಕರೆಸ
ಬೇಕಿಲ್ಲ.
24 ಬಲಿಷ್ಠರು ತಪ್ಪು ಮಾಡಿದಾಗ ದೇವರು ಅವರನ್ನು

ವಿಚಾರಿಸದೆ ನಾಶಮಾಡಿ ಅವರ ಸ್ಥಳದಲ್ಲಿ ಬೇರೆಯ
ವರನ್ನು ನೆಲೆಗೊಳಿಸುವನು.
25 ಹೀಗೆ ಆತನು ಅವರ ಕಾರ್ಯಗಳನ್ನು ಲಕ್ಷಿಸಿ, ರಾತ್ರಿ
ಯಲ್ಲಿ ಅವರನ್ನು ಸೋಲಿಸಿ ನಾಶಮಾಡುವನು.
26 ದೇವರು ದುಷ್ಟರನ್ನು ಅವರ ದುಷ್ಕೃತ್ಯಗಳ ನಿಮಿತ್ತ
ಬಹಿರಂಗವಾಗಿ ದಂಡಿಸುವನು.
27 ಯಾಕಂದರೆ ದುಷ್ಟರು ದೇವರಿಗೆ ವಿಧೇಯ
ರಾಗಲಿಲ್ಲ; ಆತನ ಮಾರ್ಗಗಳನ್ನು ಲಕ್ಷಿಸಲಿಲ್ಲ.
28 ಹೀಗೆ ಬಡವರ ಗೋಳಾಟವು ದೇವರಿಗೆ ಮುಟ್ಟು
ವಂತೆ ದುಷ್ಟರು ಮಾಡಿದರು. ಆತನು ದಿಕ್ಕಿಲ್ಲದವರ
ಕೂಗನ್ನು ಕೇಳಿದನು.
29 ಆದರೆ ದೇವರು ಬಡಜನರಿಗೆ ಸಹಾಯಮಾಡ
ದಿರಲು ನಿರ್ಧರಿಸಿದರೆ, ಆತನನ್ನು ದೋಷಿಯೆಂದು
ತೀರ್ಪುಮಾಡುವವನು ಯಾರು? ದೇವರು ತನ್ನ
ಮುಖವನ್ನು ಅವರಿಗೆ ಮರೆಮಾಡಿಕೊಂಡರೆ
ಆತನನ್ನು ನೋಡಬಲ್ಲವರು ಯಾರು? ಮನುಷ್ಯ
ರನ್ನೂ ಜನಾಂಗಗಳನ್ನೂ ಆಳುವವನು ದೇವರೇ,
30 ದೈವಹೀನನಾದ ರಾಜನು ಜನರನ್ನು ನಾಶನಕ್ಕೆ
ನಡೆಸುವುದಾದರೆ ದೇವರು ಅವನನ್ನು ಪದಚ್ಯುತಿ
ಗೊಳಿಸುವನು.
31 ಮನುಷ್ಯನು ದೇವರಿಗೆ, 'ನಾನು ದೋಷಿ, ನಾನು
ಇನ್ನೆಂದಿಗೂ ಪಾಪ ಮಾಡುವುದಿಲ್ಲ.
32 ದೇವರೇ,ನೀನು ನನಗೆ ಅಗೋಚರವಾಗಿದ್ದರೂ
ನೀತಿಮಾರ್ಗವನ್ನು ಬೋಧಿಸು, ನಾನು ತಪ್ಪುಮಾಡಿ
ದ್ದರೆ ಅದನ್ನು ಮತ್ತೆ ಮಾಡುವುದಿಲ್ಲ' ಎಂದು
ಹೇಳಬಹುದು.
33 ''ಯೋಬನೇ, ನೀನು ಮಾರ್ಪಾಟಾಗದೆ ದೇವ
ರಿಂದ ಪ್ರತಿಫಲವನ್ನು ಅಪೇಕ್ಷಿಸುವುದೇಕೆ?
ಯೋಬನೇ,ಇದು ನಿನ್ನ ನಿರ್ಧಾರ, ನನ್ನದಲ್ಲ. ನಿನ್ನ
ಆಲೋಚನೆಯನ್ನು ನನಗೆ ತಿಳಿಸು.
34 ''ಜ್ಞಾನಿಗಳೂ ಬುದ್ಧಿವಂತರೂ ನನ್ನ ಮಾತುಗಳಿಗೆ
ಕಿವಿಗೊಟ್ಟು,
35 'ಯೋಬನು ತಿಳುವಳಿಕೆಯಿಲ್ಲದೆ ಮಾತಾಡುತ್ತಾನೆ.
ಅವನ ಮಾತುಗಳಿಗೆ ಅರ್ಥವೇ ಇಲ್ಲ!' ಎಂದು
ಹೇಳುವರು.
36 ಯೋಬನಿಗೆ ಪರಿಶೋಧನೆ ನಿರಂತರವಾಗಿದ್ದರೆ
ಒಳ್ಳೆಯದು. ಯಾಕಂದರೆ ಅವನು ದುಷ್ಟನಂತೆ
ಉತ್ತರಿಸುತ್ತಿದ್ದಾನೆ.
37 ಅವನು ತನ್ನ ಪಾಪಕ್ಕೆ ಇನ್ನೂ ಕೂಡಿಸಿಕೊಳ್ಳು
ತ್ತಿದ್ದಾನೆ; ನಮ್ಮ ಮಧ್ಯದಲ್ಲಿ ತನ್ನದುಷ್ಟತನವನ್ನು
ಅಧಿಕಮಾಡಿಕೊಳ್ಳುತ್ತಿದ್ದಾನೆ; ದೇವದ್ರೋಹವನ್ನು
ಹೆಚ್ಚಿಸಿಕೊಳ್ಳುತ್ತಿದ್ದಾನೆ.''

35 ಎಲೀಹು ಮಾತನ್ನು ಮುಂದುವರಿಸಿ,
2 ''ಯೋಬನೇ, 'ನಾನು ದೇವರಿಗಿಂತ ನೀತಿ
ವಂತನೆಂದು' ನೀನು ಹೇಳುವುದು ನ್ಯಾಯವಲ್ಲ.
3 ಅಲ್ಲದೆ ನೀನು ದೇವರಿಗೆ, 'ಮನುಷ್ಯನು ಪಾಪ
ಮಾಡದೆ ದೇವರನ್ನು ಮೆಚ್ಚಿಸುವುದರಿಂದ ಅವನಿಗೆ
ಪ್ರಯೋಜನವೇನು? ನಾನು ಪಾಪಮಾಡದಿದ್ದರೆ
ನನಗೇನು ಒಳಿತಾಗದು;
4 ''ಯೋಬನೇ, ನಾನು ನಿನಗೂ ನಿನ್ನೊಂದಿಗಿರುವ
ಸ್ನೇಹಿತರಿಗೂ ಉತ್ತರಕೊಡುವೆ.
5 ಕಣ್ಣೆತ್ತಿ ಆಕಾಶವನ್ನು ನೋಡು. ನಿನಗಿಂತಲೂ
ಎತ್ತರದಲ್ಲಿರುವ ಮೋಡಗಳನ್ನು ದೃಷ್ಟಿಸು.
6 ಯೋಬನೇ, ನೀನು ಪಾಪಮಾಡಿದರೆ, ಅದರಿಂದ
ದೇವರಿಗೇನೂ ಕೇಡಾಗುವುದಿಲ್ಲ. ನೀನು ಅನೇಕ
ಪಾಪಗಳನ್ನು ಮಾಡಿದ್ದರೂ ಅದರಿಂದ ದೇವ
ರಿಗೇನೂ ಆಗುವುದಿಲ್ಲ.
7 ಯೋಬನೇ,, ನೀನು ಒಳ್ಳೆಯವನಾಗಿದ್ದರೆ, ಅದ
ರಿಂದ ದೇವರಿಗೇನೂ ಸಹಾಯವಾಗುವುದಿಲ್ಲ.
ದೇವರಿಗೆ ನಿನ್ನಿಂದೇನೂ ಲಾಭವಾಗುವುದಿಲ್ಲ.
8 ಯೋಬನೇ, ನಿನ್ನ ದುಷ್ಟತನದಿಂದ ನಿನ್ನಂಥವರಿಗೇ
ಕೇಡಾಗುವುದು; ನಿನ್ನ ಒಳ್ಳೆಯಕಾರ್ಯಗಳಿಂದ
ನಿನ್ನಂಥವರಿಗೇ ಒಳ್ಳೆಯದಾಗುವುದು.
9 ''ಹಿಂಸೆಗೂ ಅನ್ಯಾಯಕ್ಕೂ ಒಳಗಾಗಿರುವವರು
ತಮ್ಮನ್ನು ಬಲಿಷ್ಠರಿಂದ ಬಿಡಿಸಬಲ್ಲ ಯಾರಿ
ಗಾದರೂ ಮೊರೆಯಿಡುವರು.
10 ಆದರೆ ಆ ಕೆಟ್ಟ ಜನರು ಸಹಾಯಕ್ಕಾಗಿ ದೇವರನ್ನು
ಕೇಳಿಕೊಳ್ಳುವುದಿಲ್ಲ. ಅವರು, 'ನನ್ನನ್ನು ಸೃಷ್ಟಿಸಿದ
ದೇವರೆಲ್ಲಿ' ಎಂದು ಕೇಳುವುದಿಲ್ಲ. 'ಕುಗ್ಗಿಹೋದ
ವರಿಗೆ ಸಹಾಯಮಾಡುವ ದೇವರೆಲ್ಲಿ?' ಎಂದು
ಕೇಳುವುದಿಲ್ಲ.
11 ನಮ್ಮನ್ನು ಪಕ್ಷಿಗಳಿಗಿಂತಲೂ ಪ್ರಾಣಿಗಳಿಗಿಂತಲೂ
ಜ್ಞಾನಿಗಳನ್ನಾಗಿ ಮಾಡುವ ದೇವರೆಲ್ಲಿ?' ಎಂದು
ಅವರು ಕೇಳುವುದಿಲ್ಲ.
12 ''ಅಲ್ಲದೆ ಆ ಕೆಟ್ಟವರು ದೇವರನ್ನು ಸಹಾಯಕ್ಕಾಗಿ
ಕೇಳಿಕೊಂಡರೂ ಆತನು ಅವರಿಗೆ ಉತ್ತರಿಸುವು
ದಿಲ್ಲ. ಯಾಕಂದರೆ ಅವರು ದುಷ್ಟರೂ ದುರಾಭಿ
ಮಾನಿಗಳೂ ಆಗಿದ್ದಾರೆ.
13 ಹೌದು, ದೇವರು ಅವರ ಬೆಲೆಯಿಲ್ಲದ ಬೇಡಿಕೆ
ಯನ್ನು ಕೇಳುವುದಿಲ್ಲ; ಸರ್ವಶಕ್ತನಾದ ದೇವರು
ಅವರಿಗೆ ಗಮನಕೊಡುವುದಿಲ್ಲ.
14 ಯೋಬನೇ, ನೀನು, 'ದೇವರನ್ನು ಕಾಣಲಾರೆನು'
ಎಂದು ಹೇಳುವಾಗ ಆತನು ನಿನಗೆ ಕಿವಿಗೊಡು
ವುದಿಲ್ಲ. ನಿನ್ನ ವಾಜ್ಯವು ಆತನ ಮುಂದೆ ಇರುವುದ

ರಿಂದ ನೀನು ಆತನಿಗಾಗಿ ಕಾದುಕೊಂಡಿರ
ಬೇಕು.
15 ‘‘ದೇವರು ಕೆಟ್ಟಜನರನ್ನು ದಂಡಿಸುವುದಿಲ್ಲ; ಪಾಪ
ವನ್ನು ಗಮನಿಸುವುದಿಲ್ಲ ಎಂಬುದು ಯೋಬನ
ಆಲೋಚನೆ.
16 ಆದ್ದರಿಂದ ಯೋಬನು ತನ್ನ ನಿಷ್ಪ್ರಯೋಜಕ
ಮಾತನ್ನು ಮುಂದುವರಿಸುತ್ತಿದ್ದಾನೆ; ದುರಾಭಿ
ಮಾನದಿಂದ ವರ್ತಿಸುತ್ತಿದ್ದಾನೆ; ತಿಳುವಳಿಕೆಯಿಲ್ಲದೆ
ಮಾತಾಡುತ್ತಿದ್ದಾನೆ.’’

36 ಎಲೀಹು ಮಾತನ್ನು ಮುಂದುವರಿಸಿ
ಇಂತೆಂದನು:
2 ‘‘ಯೋಬನೇ, ಇನ್ನು ಸ್ವಲ್ಪಹೊತ್ತು ನನ್ನೊಂದಿಗೆ
ತಾಳ್ಮೆಯಿಂದಿರು. ದೇವರ ಪರವಾಗಿ ಹೇಳ
ಬೇಕಾಗಿರುವ ಇನ್ನೂ ಕೆಲವು ಮಾತುಗಳಿವೆ.
3 ನಾನು ಜ್ಞಾನವನ್ನು ಬಹುದೂರದಿಂದ ಪಡೆದು
ಕೊಂಡಿದ್ದೇನೆ. ನನ್ನ ಸೃಷ್ಟಿಕರ್ತನಾದ ದೇವರು
ನ್ಯಾಯವಂತನೆಂದು ನಿರೂಪಿಸುವೆ.
4 ಯೋಬನೇ, ನಾನು ಹೇಳುವ ಪ್ರತಿಯೊಂದು
ಮಾತೂ ಸತ್ಯ. ನಿನ್ನ ಬಳಿಯಲ್ಲಿ ಜ್ಞಾನಪೂರ್ಣ
ನೊಬ್ಬನು ಇದ್ದಾನೆ.
5 ‘‘ದೇವರು ಮಹಾಶಕ್ತಿಶಾಲಿಯಾಗಿದ್ದರೂ ಜನರನ್ನು
ತಿರಸ್ಕರಿಸುವುದಿಲ್ಲ. ದೇವರು ಮಹಾಬಲ
ಶಾಲಿಯೂ ಹೌದು, ಮಹಾ ಜ್ಞಾನಿಯೂ ಹೌದು!
6 ದುಷ್ಟರು ಜೀವಿಸಲು ದೇವರು ಅವಕಾಶ
ಕೊಡುವುದಿಲ್ಲ. ದೇವರು ಬಡಜನರಿಗೆ ಯಾವಾ
ಗಲೂ ನ್ಯಾಯದೊರಕಿಸುವನು.

7 ನೀತಿವಂತರನ್ನು ದೇವರು ಪರಿಪಾಲಿಸುವನು;
ಆತನು ಒಳ್ಳೆಯವರನ್ನು ಅಧಿಪತಿಗಳನ್ನಾಗಿ ನೇಮಿ
ಸುವನು; ಅವರಿಗೆ ಸದಾಕಾಲ ಗೌರವ
ದೊರೆಯುವಂತೆ ಮಾಡುವನು.
8 ‘‘ಆದರೆ ಅವರು ದಂಡನೆಗೆ ಒಳಗಾಗಿ ಸರಪಣಿ
ಗಳಿಂದ ಬಂಧಿಸಲ್ಪಟ್ಟು ಸಂಕಟ ಪಡುತ್ತಿದ್ದರೆ
9 ಅವರ ದುಷ್ಕೃತ್ಯವನ್ನೂ ಪಾಪವನ್ನೂ ಗರ್ವವನ್ನೂ
ದೇವರು ಅವರಿಗೆ ತಿಳಿಯಪಡಿಸುವನು.
10 ಇದಲ್ಲದೆ ತನ್ನ ಎಚ್ಚರಿಕೆಯ ಮಾತಿಗೆ ಕಿವಿಗೊಡು
ವಂತೆ ಬಲವಂತ ಮಾಡುವನು; ಪಾಪಮಾಡ
ಕೂಡದೆಂದು ಆಜ್ಞಾಪಿಸುವನು.
11 ಅವರು ದೇವರಿಗೆ ಕಿವಿಗೊಟ್ಟು ಆತನಿಗೆ ವಿಧೇಯ
ರಾದರೆ, ಆತನು ಅವರನ್ನು ಅಭಿವೃದ್ಧಿಪಡಿಸುವನು;
ಆಗ ಅವರ ಜೀವನವು ಸುಖಕರವಾಗುವುದು.
12 ಆದರೆ ಅವರು ದೇವರಿಗೆ ವಿಧೇಯರಾಗದಿದ್ದರೆ
ನಾಶವಾಗುವರು; ಮೂಢರಂತೆ ಸಾಯುವರು.
13 ‘‘ದೇವರ ಬಗ್ಗೆ ಲಕ್ಷ್ಯಿಸದವರು ಯಾವಾಗಲೂ
ಕೋಪದಿಂದಿರುವರು. ದೇವರು ಅವರನ್ನು ದಂಡಿ
ಸಿದರೂ ಅವರು ದೇವರಿಗೆ ಮೊರೆಯಿಡು
ವುದಿಲ್ಲ.
14 ಅವರು ಯೌವನ ಪ್ರಾಯದಲ್ಲೇ ಪುರುಷಗಾಮಿ
ಗಳಂತೆ ಸಾಯುವರು.
15 ಆದರೆ ದೇವರು ದೀನರನ್ನು ವಿಪತ್ತುಗಳಿಂದ ಬಿಡಿಸು
ವನು. ಆ ವಿಪತ್ತುಗಳಿಂದ ದೇವರು ಜನರನ್ನು
ಎಚ್ಚರಗೊಳಿಸಿ ತನಗೆ ಕಿವಿಗೊಡುವಂತೆ ಮಾಡು
ವನು.
16 ‘‘ಯೋಬನೇ, ದೇವರು ನಿನ್ನನ್ನು ಕೇಡಿನಿಂದ ತಪ್ಪಿಸಿ
ಸುರಕ್ಷಿತವೂ ಅಭಿವೃದ್ಧಿಕರವೂ ಆಗಿರುವ ಸ್ಥಳಕ್ಕೆ
ಕರೆದುಕೊಂಡು ಬಂದು ನಿನಗೆ ಊಟವನ್ನು
ಯಥೇಚ್ಛವಾಗಿ ಬಡಿಸಲು ಇಷ್ಟಪಡುತ್ತಾನೆ.
17 ಯೋಬನೇ, ಈಗಲಾದರೋ ನೀನು ದೋಷಿ
ಯೆಂದು ನಿರ್ಣಯಿಸಲ್ಪಟ್ಟಿರುವೆ; ದುಷ್ಟನಂತೆ
ದಂಡಿಸಲ್ಪಟ್ಟಿರುವೆ.
18 ಯೋಬನೇ, ಐಶ್ವರ್ಯವು ನಿನ್ನನ್ನು ಮೋಸ
ಗೊಳಿಸದಿರಲಿ; ಹಣವು ನಿನ್ನ ಮನಸ್ಸನ್ನು ಮಾರ್ಪ
ಡಿಸದಿರಲಿ. ನಿನ್ನನ್ನು ನಾಶನಕ್ಕೆ ನಡೆಸದಿರಲಿ.
19 ನಿನ್ನ ಎಲ್ಲಾ ಹಣವು ಈಗ ನಿನಗೆ ಸಹಾಯ ಮಾಡ
ಲಾರದು; ಬಲಿಷ್ಠರು ಸಹ ನಿನಗೆ ಸಹಾಯ ಮಾಡ
ಲಾರರು.
20 ಜನಾಂಗಗಳು ಇದ್ದಕ್ಕಿದ್ದಂತೆ ಕಾಣೆಯಾಗುವ ರಾತ್ರಿ
ಗಾಗಿ ಬಯಸಬೇಡ.
21 ಯೋಬನೇ, ನೀನು ಬಹಳ ಸಂಕಟಪಟ್ಟಿರುವೆ; ಆದ್ದ
ರಿಂದ ಕೆಡುಕನ್ನು ಆರಿಸಿಕೊಳ್ಳಬೇಡ; ತಪ್ಪು
ಮಾಡದಂತೆ ಎಚ್ಚರಿಕೆಯಾಗಿರು.
22 ‘‘ಇಗೋ, ದೇವರ ಶಕ್ತಿಯು ಮಹಾವ್ಯಕ್ತಿಯನ್ನಾಗಿ
ಮಾಡುವುದು! ದೇವರು ಎಲ್ಲರಿಗೂ ಅತ್ಯಂತ
ದೊಡ್ಡ ಉಪದೇಶಕನಾಗಿದ್ದಾನೆ.
23 ದೇವರಿಗೆ ಕೆಲಸವನ್ನು ನೇಮಿಸಲು ಯಾರಿಗೆ
ಸಾಧ್ಯ? ದೇವರಿಗೆ, ‘ನೀನು ತಪ್ಪನ್ನು ಮಾಡಿರುವೆ’
ಎಂದು ಹೇಳಲು ಯಾರಿಗೆ ಸಾಧ್ಯ?
24 ‘‘ದೇವರನ್ನು ಆತನ ಕಾರ್ಯಗಳಿಗಾಗಿ ಕೊಂಡಾ
ಡಲು ಮರೆಯಬೇಡ. ಜನರು ದೇವರನ್ನು ಕುರಿತು
ಅನೇಕ ಸ್ತುತಿಗೀತೆಗಳನ್ನು ಬರೆದಿದ್ದಾರೆ.
25 ಪ್ರತಿಯೊಬ್ಬನೂ ದೇವರ ಕಾರ್ಯವನ್ನು ನೋಡ
ಬಲ್ಲನು. ದೂರದೇಶಗಳ ಜನರು ಸಹ ದೇವರ
ಕಾರ್ಯವನ್ನು ನೋಡಬಲ್ಲರು.

26 ಹೌದು, ದೇವರೇ ಮಹೋನ್ನತನು. ಆತನ ಮಹತ್ವ
ವನ್ನು ನಾವು ಅರ್ಥಮಾಡಿಕೊಳ್ಳಲಾರೆವು. ದೇವರು
ಎಂದಿನಿಂದ ಜೀವಿಸಿರುವನೊ ನಮಗೆ ತಿಳಿಯದು.
27 “ದೇವರು ಭೂಮಿಯ ನೀರನ್ನು ಹಬೆಯ ರೂಪ
ದಲ್ಲಿ ಮೇಲಕ್ಕೆ ಕೊಂಡೊಯ್ದು ಅದನ್ನು ಮಂಜ
ನ್ನಾಗಿಯೂ ಮಳೆಯನ್ನಾಗಿಯೂ ಪರಿವರ್ತಿಸು
ತ್ತಾನೆ.
28 ಆದ್ದರಿಂದ ಮೋಡಗಳು ನೀರನ್ನು ಸುರಿಯ
ಮಾಡುತ್ತವೆ; ಅನೇಕರ ಮೇಲೆ ಮಳೆಯು
ಸುರಿಯುತ್ತದೆ.
29 ದೇವರು ಮೋಡಗಳನ್ನು ಹರಡುವ ಬಗೆಯನ್ನಾ
ಗಲೀ ಆಕಾಶದಲ್ಲಿ ಗುಡುಗು ಗರ್ಜಿಸುವ
ಬಗೆಯನ್ನಾಗಲೀ ಯಾವನೂ ಅರ್ಥಮಾಡಿಕೊಳ್ಳ
ಲಾರನು.
30 ಇಗೋ, ದೇವರು ತನ್ನ ಪ್ರಕಾಶವನ್ನು ಆಕಾಶ
ದಲ್ಲೆಲ್ಲಾ ಹರಡಿ ಸಮುದ್ರದ ಆಳವಾದ ಭಾಗಗಳನ್ನು
ಬೆಳಕಿನಿಂದ ತುಂಬಿಸಿದ್ದಾನೆ.
31 ಜನಾಂಗಗಳನ್ನು ಹತೋಟಿಯಲ್ಲಿಡುವುದಕ್ಕಾ
ಗಿಯೂ ಬೇಕಾದಷ್ಟು ಆಹಾರವನ್ನು ಕೊಡುವುದ
ಕ್ಕಾಗಿಯೂ ದೇವರು ಅವುಗಳನ್ನು ಉಪಯೋಗಿ
ಸುವನು.
32 ದೇವರು ತನ್ನ ಕೈಗಳಲ್ಲಿ ಸಿಡಿಲನ್ನು ಹಿಡಿದುಕೊಂಡು
ಅದಕ್ಕೆ ಆಜ್ಞಾಪಿಸಲು ಅದು ಆತನ ಚಿತ್ತಕ್ಕನು
ಸಾರವಾಗಿ ಹೊಡೆಯುವುದು.
33 ಬಿರುಗಾಳಿಯು ಬರುತ್ತಿದೆಯೆಂದು ಗುಡುಗು
ಎಚ್ಚರಿಕೆ ನೀಡುತ್ತದೆ; ಬಿರುಗಾಳಿ ಬರುತ್ತಿರುವುದು
ದನಕರುಗಳಿಗೂ ಸಹ ಗೊತ್ತಾಗುವುದು.

37 “ಗುಡುಗು ಮಿಂಚುಗಳು ನನ್ನನ್ನು ಭಯ
ಗೊಳಿಸಿವೆ. ನನ್ನ ಹೃದಯವು ಥವಥವನೆ
ಬಡಿದುಕೊಳ್ಳುತ್ತಿದೆ.
2 ಪ್ರತಿಯೊಬ್ಬರೂ ಕೇಳಿರಿ! ದೇವರ ಧ್ವನಿಯು ಗುಡು
ಗಿನ ಧ್ವನಿಯಂತಿದೆ. ದೇವರ ಬಾಯಿಯಿಂದ
ಬರುವ ಗುಡುಗುಟ್ಟುವ ಧ್ವನಿಯನ್ನು ಕೇಳಿರಿ.
3 ಇಡೀ ಆಕಾಶಮಂಡಲದಲ್ಲೆಲ್ಲಾ ಪ್ರಕಾಶಿಸಲೆಂದು
ದೇವರು ತನ್ನ ಸಿಡಿಲನ್ನು ಕಳುಹಿಸುವನು. ಅದು
ಭೂಮಿಯ ಮೇಲೆಲ್ಲಾ ಪ್ರಕಾಶಿಸುವುದು.
4 ಸಿಡಿಲು ಪ್ರಕಾಶಿಸಿದ ನಂತರ ದೇವರ ಗರ್ಜನೆಯು
ಕೇಳಿಬರುವುದು. ದೇವರು ತನ್ನ ಆಶ್ಚರ್ಯಕರ
ವಾದ ಧ್ವನಿಯಿಂದ ಗುಡುಗುಟ್ಟುವನು! ಸಿಡಿಲು
ಪ್ರಕಾಶಿಸುವಾಗ ದೇವರ ಧ್ವನಿಯು ಗುಡುಗುಟ್ಟು
ವುದು!
5 ದೇವರ ಗುಡುಗುಟ್ಟುವ ಧ್ವನಿಯು ಆಶ್ಚರ್ಯಕರ
ವಾಗಿದೆ! ನಾವು ಅರ್ಥಮಾಡಿಕೊಳ್ಳಲಾಗದ ಮಹಾ
ಕಾರ್ಯಗಳನ್ನು ಆತನು ಮಾಡುತ್ತಾನೆ.
6 ದೇವರು ಹಿಮಕ್ಕೆ, ‘ಭೂಮಿಯ ಮೇಲೆ ಬೀಳು’
ಎಂತಲೂ ಮಳೆಗೆ, ‘ಭೂಮಿಯ ಮೇಲೆ ಸುರಿ’
ಎಂತಲೂ ಆಜ್ಞಾಪಿಸುವನು.
7 ದೇವರು ತನ್ನ ಕಾರ್ಯವನ್ನು ಎಲ್ಲರೂ ತಿಳಿದು
ಕೊಳ್ಳಬೇಕೆಂದು ಪ್ರತಿಯೊಬ್ಬರನ್ನು ಮನೆಯೊಳಗೆ
ಕೂಡಿಹಾಕುತ್ತಾನೆ,*
8 ಪ್ರಾಣಿಗಳು ಓಡಿಹೋಗಿ ತಮ್ಮ ಗುಹೆಗಳಲ್ಲಿ
ಸೇರಿಕೊಳ್ಳುತ್ತವೆ.
9 ದಕ್ಷಿಣ ದಿಕ್ಕಿನಿಂದ ತಂಗಾಳಿಯೂ ಉತ್ತರ ದಿಕ್ಕಿ
ನಿಂದ ಚಳಿಗಾಳಿಯೂ ಬರುತ್ತವೆ.
10 ದೇವರ ಉಸಿರು ನೀರನ್ನು ಮಂಜನ್ನಾಗಿ ಮಾಡಿ
ಸಾಗರಗಳನ್ನು ಹೆಪ್ಪುಗಟ್ಟಿಸುವುದು.
11 ದೇವರು ಮೋಡಗಳಲ್ಲಿ ನೀರು ತುಂಬಿಸುವನು.
ಆತನು ತನ್ನ ಮಿಂಚನ್ನು ಮೋಡಗಳಲ್ಲೆಲ್ಲಾ ಹರಡು
ವನು.
12 ಭೂಮಂಡಲದಲ್ಲೆಲ್ಲಾ ಚಲಿಸಲು ದೇವರು ಮೋಡ
ಗಳಿಗೆ ಆಜ್ಞಾಪಿಸುವನು. ಮೋಡಗಳು ಆತನ ಆಜ್ಞೆಗ
ನುಸಾರವಾಗಿ ಮಾಡುತ್ತವೆ.
13 ದೇವರು ಜನರನ್ನು ದಂಡಿಸುವುದಕ್ಕಾಗಲೀ
ನೀರನ್ನು ಒದಗಿಸುವ ಮೂಲಕ ತನ್ನ ನಿರಂತರ
ಪ್ರೀತಿಯನ್ನು ತೋರಿಸುವುದಕ್ಕಾಗಲೀ ಮೋಡ
ಗಳನ್ನು ಬರಮಾಡುವನು.
14 “ಯೋಬನೇ, ಒಂದು ನಿಮಿಷ ಮೌನವಾಗಿದ್ದು
ಕೇಳು. ದೇವರ ಅದ್ಭುತಕಾರ್ಯಗಳ ಬಗ್ಗೆ ಮೌನ
ವಾಗಿದ್ದು ಆಲೋಚಿಸು.
15 ಯೋಬನೇ, ದೇವರು ಮೋಡಗಳನ್ನು ಹೇಗೆ
ಹತೋಟಿಯಲ್ಲಿಡುತ್ತಾನೆಂಬುದು ನಿನಗೆ ಗೊತ್ತಿ
ದೆಯೋ? ದೇವರು ಸಿಡಿಲನ್ನು ಹೇಗೆ ಹೊಳೆಯ
ಮಾಡುತ್ತಾನೆಂಬುದು ನಿನಗೆ ಗೊತ್ತಿದೆಯೋ?
16 ಆಕಾಶದಲ್ಲಿ ಮೋಡಗಳು ಹೇಗೆ ತೂಗಾಡುತ್ತಿವೆ
ಎಂಬುದು ನಿನಗೆ ಗೊತ್ತಿದೆಯೋ? ದೇವರ
ಆಶ್ಚರ್ಯಕಾರ್ಯಗಳಲ್ಲಿ ಮೋಡಗಳು ಒಂದು
ಉದಾಹರಣೆಯಷ್ಟೇ. ಅವುಗಳ ಬಗ್ಗೆ ದೇವರಿಗೆ
ಸಂಪೂರ್ಣವಾಗಿ ತಿಳಿದಿದೆ.
17 ಯೋಬನೇ, ನಿನಗೆ ಇವುಗಳ ಬಗ್ಗೆ ಗೊತ್ತಿಲ್ಲ. ದಕ್ಷಿಣ
ದಿಕ್ಕಿನ ಬಿಸಿಗಾಳಿಯಿಂದ ಭೂಮಿಯು ಸ್ತಬ್ಧವಾ

---

**ಮನೆಯೊಳಗೆ ಕೂಡಿಹಾಕುತ್ತಾನೆ** ಪ್ರಕೃತಿಯ ವಿಕೋಪಕ್ಕೆ ಒಳಗಾಗಿ ದೇವರಿಂದ ಮನೆಯೊಳಗೆ ಬಂಧಿತರಾದ ಜನರು, ದೇವರ ಕೈಕೆಲಸವನ್ನು ಮನವರಿಕೆ ಮಾಡಿಕೊಳ್ಳುವರು.

ದಾಗ, ನೀನು ಬೆವತು ಬಟ್ಟೆಗಳು ಒದ್ದೆಯಾಗು
ವುದಷ್ಟೇ ನಿನಗೆ ತಿಳಿದಿದೆ.
18 ಯೋಬನೇ, ಆಕಾಶವನ್ನು ಹರಡುವುದಕ್ಕಾಗಲೀ
ಅದಕ್ಕೆ ಕಂಚಿನ ದರ್ಪಣದಂತೆ ಮೆರಗು ನೀಡುವು
ದಕ್ಕಾಗಲೀ ನೀನು ದೇವರಿಗೆ ಸಹಾಯಮಾಡ
ಬಲ್ಲೆಯಾ?
19 ‘‘ಯೋಬನೇ, ನಾವು ದೇವರಿಗೆ ಹೇಳ ಬೇಕಾದು
ದನ್ನು ನಮಗೆ ತಿಳಿಸು! ನಮಗೆ ಸಾಕಷ್ಟು ಗೊತ್ತಿಲ್ಲ
ದಿರುವುದರಿಂದ ಏನು ಹೇಳಬೇಕೊ ನಮಗೆ
ತಿಳಿಯದು.
20 ನಾನು ದೇವರಿಗೆ, ನಿನ್ನೊಂದಿಗೆ ಮಾತಾಡಬೇಕಾ
ಗಿದೆ ಎಂದು ಹೇಳಲಾರೆ. ಯಾಕಂದರೆ ಅದು
ನಾಶನವನ್ನೇ ಕೇಳಿಕೊಂಡಂತಾಗುವುದು.
21 ಯಾವನೂ ಪ್ರಕಾಶಮಾನವಾದ ಸೂರ್ಯನನ್ನು
ನೋಡಲಾರನು. ಗಾಳಿಯು ಮೋಡಗಳನ್ನು
ಬಡಿದುಕೊಂಡು ಹೋದ ಮೇಲೆ ಆಕಾಶದಲ್ಲಿ
ಸೂರ್ಯನು ಬಹು ಪ್ರಕಾಶಮಾನವಾಗಿ ಹೊಳೆ
ಯುತ್ತಿರುವನು.
22 ದೇವರ ಹೊನ್ನಿನ ಮಹಿಮೆಯು ಪವಿತ್ರ ಪರ್ವತ
ದಿಂದ ಹೊಳೆಯುವುದು. ದೇವರ ಸುತ್ತಲೂ
ಪ್ರಕಾಶಮಾನವಾದ ಬೆಳಕು ಸುತ್ತುವರಿದಿದೆ.
23 ‘‘ಸರ್ವಶಕ್ತನಾದ ದೇವರು ಮಹೋನ್ನತನೇ ಸರಿ!
ನಾವು ಆತನನ್ನು ಅರ್ಥಮಾಡಿಕೊಳ್ಳಲು ನಮಗೆ
ಸಾಧ್ಯವಿಲ್ಲ. ದೇವರು ಮಹಾ ಬಲಿಷ್ಠನಾಗಿದ್ದರೂ
ನಮಗೆ ಒಳ್ಳೆಯವನೂ ನ್ಯಾಯವಂತನೂ
ಆಗಿದ್ದಾನೆ. ಆತನು ನಮ್ಮನ್ನು ಹಿಂಸಿಸಲು ಇಷ್ಟ
ಪಡುವುದಿಲ್ಲ.
24 ಆದಕಾರಣವೇ ಜನರು ದೇವರಲ್ಲಿ ಭಯಭಕ್ತಿ
ಯಿಂದಿರುವರು. ದೇವರಾದರೋ ತಮ್ಮನ್ನು
ಜ್ಞಾನಿಗಳೆಂದು ಭಾವಿಸಿಕೊಂಡಿರುವ ಗರ್ವಿಷ್ಠರನ್ನು
ಗೌರವಿಸುವುದಿಲ್ಲ.’’

## ಯೋಬನಿಗೆ ದೇವರ ಉತ್ತರ

38 ಆಗ ಯೆಹೋವನು ಬಿರುಗಾಳಿಯೊಳಗಿಂದ
ಯೋಬನಿಗೆ ಪ್ರತ್ಯುತ್ತರವಾಗಿ ಇಂತೆಂದನು;
2 ‘‘ನನ್ನ ಉದ್ದೇಶಗಳನ್ನು ಮೂರ್ಖತನದ ಮಾತು
ಗಳಿಂದ ಗಲಿಬಿಲಿಗೊಳಿಸುತ್ತಿರುವ ಈ ಮನುಷ್ಯನು
ಯಾರು?’’
3 ಯೋಬನೇ, ಪುರುಷನಂತೆ ಬಲಿಷ್ಠನಾಗಿರು. ನಾನು
ನಿನಗೆ ಕೇಳುವ ಪ್ರಶ್ನೆಗಳಿಗೆ ಉತ್ತರಿಸಲು ಸಿದ್ಧ
ನಾಗು.
4 ‘‘ಯೋಬನೇ, ನಾನು ಭೂಮಿಗೆ ಅಸ್ತಿವಾರ ಹಾಕಿ
ದಾಗ ನೀನು ಎಲ್ಲಿದ್ದೆ? ನೀನು ಬಹು ಜ್ಞಾಣ
ನಾಗಿದ್ದರೆ ನನಗೆ ಉತ್ತರಕೊಡು.
5 ಯೋಬನೇ, ಭೂಮಿಯ ಅಳತೆಗಳನ್ನು ಯಾರು
ನಿರ್ಧರಿಸಿದರು? ನಿನಗೆ ಅದು ತಿಳಿದದೆ.
ಭೂಮಿಯ ಅಳತೆಯನ್ನು ನೂಲುಗುಂಡಿನಿಂದ
ಅಳೆದವರು ಯಾರು?
6 ಭೂಮಿಯ ಆಧಾರಸ್ತಂಭಗಳು ಯಾವುದರ
ಮೇಲೆ ನೆಲೆಗೊಂಡಿವೆ.? ಭೂಮಿಯ ಅಸ್ತಿವಾರಕ್ಕೆ
ಮೊದಲ ಕಲ್ಲನ್ನು ಹಾಕಿದವರು ಯಾರು?
7 ಅದು ಸಂಭವಿಸಿದಾಗ, ಮುಂಜಾನೆಯ ನಕ್ಷತ್ರಗಳು
ಒಟ್ಟಾಗಿ ಹಾಡಿದವು; ದೇವದೂತರುಗಳು ಆನಂದ
ಘೋಷ ಮಾಡಿದರು!
8 ‘‘ಯೋಬನೇ, ಭೂಮಿಯ ಗರ್ಭದೊಳಗಿಂದ
ನುಗ್ಗಿಬರುವ ಸಮುದ್ರದ ನೀರನ್ನು ನಿಲ್ಲಿಸುವುದ
ಕ್ಕಾಗಿ ಬಾಗಿಲುಗಳನ್ನು ಮುಚ್ಚಿದವರು ಯಾರು?
9 ಆ ಸಮಯದಲ್ಲಿ ನಾನು ಸಮುದ್ರವನ್ನು ಮೋಡ
ಗಳಿಂದ ಮುಚ್ಚಿ ಕಾರ್ಗತ್ತಲನ್ನು ಸುತ್ತು ಬಟ್ಟೆಯಂತೆ
ಸುತ್ತಿದೆನು.
10 ನಾನು ಸಮುದ್ರಕ್ಕೆ ಮೇರೆಯನ್ನು ನಿಗದಿಪಡಿಸಿ ಕದ
ಹಾಕಿದ ಬಾಗಿಲುಗಳ ಹಿಂಭಾಗದಲ್ಲಿಟ್ಟೆನು.
11 ನಾನು ಸಮುದ್ರಕ್ಕೆ, ‘ನೀನು ಇಲ್ಲಿಯವರೆಗೆ ಬರ
ಬಹುದು, ಆದರೆ ಇದಕ್ಕಿಂತ ಹೆಚ್ಚಿಗೆ ಬರಕೂಡದು.
ನಿನ್ನ ಹೆಮ್ಮೆಯ ಅಲೆಗಳು ಇಲ್ಲೇ ನಿಲ್ಲಬೇಕು’
ಎಂದು ಹೇಳಿದೆನು.
12 ‘‘ಯೋಬನೇ, ನಿನ್ನ ಜೀವಮಾನದಲ್ಲಿ ಎಂದಾ
ದರೂ ಮುಂಜಾನೆಗಾಗಲೀ ಹಗಲಿಲಾಗಲೀ
ಆರಂಭವಾಗೆಂದು ಆಜ್ಞಾಪಿಸಿರುವಿಯಾ?
13 ಯೋಬನೇ, ದುಷ್ಟರನ್ನು ಅವರು ಅಡಗಿಕೊಂಡಿ
ರುವ ಸ್ಥಳಗಳಲ್ಲಿ ಹಿಡಿದು ನಡುಗಿಸಬೇಕೆಂದು
ನೀನು ಮುಂಜಾನೆಯ ಬೆಳಕಿಗೆ ಎಂದಾದರೂ
ಆಜ್ಞಾಪಿಸಿರುವಿಯಾ?
14 ಮುಂಜಾನೆಯ ಬೆಳಕು ಬೆಟ್ಟಗಳನ್ನೂ ಕಣಿವೆ
ಗಳನ್ನೂ ಸ್ಪಷ್ಟವಾಗಿ ಕಾಣಮಾಡುತ್ತವೆ. ಹಗಲು
ಬೆಳಕು ಭೂಮಿಗೆ ಬಂದಾಗ ಆ ಸ್ಥಳಗಳ ರೂಪಗಳು
ಮೇಲಂಗಿಯ ನೆರಿಗೆಗಳಂತೆ ಎದ್ದುಕಾಣುತ್ತವೆ. ಆ
ಸ್ಥಳಗಳು ಮುದ್ರೆಯೊತ್ತಿದ ಜೇಡಿಮಣ್ಣಿನಂತೆ
ರೂಪುಗೊಳ್ಳುತ್ತವೆ.
15 ದುಷ್ಟರು ಹಗಲುಬೆಳಕನ್ನು ಇಷ್ಟಪಡುವುದಿಲ್ಲ.
ಅದು ಪ್ರಕಾಶಮಾನವಾಗಿ ಹೊಳೆಯುವಾಗ,
ದುಷ್ಕೃತ್ಯಗಳನ್ನು ಮಾಡದಂತೆ ಅದು ಅವರನ್ನು
ತಡೆಯುತ್ತದೆ.

16 ‘‘ಯೋಬನೇ, ಸಮುದ್ರವು ಆರಂಭವಾಗುವ
ಅತ್ಯಂತ ಆಳವಾದ ಭಾಗಗಳಿಗೆ ನೀನು ಎಂದಾ
ದರೂ ಹೋಗಿರುವಿಯಾ? ಸಾಗರದ ತಳದ
ಮೇಲೆ ನೀನು ಎಂದಾದರೂ ನಡೆದಿರುವಿಯಾ?
17 ಯೋಬನೇ, ಪಾತಾಳದ ದ್ವಾರಗಳನ್ನಾಗಲೀ
ಘೋರಾಂಧಕಾರದ ಬಾಗಿಲುಗಳನ್ನಾಗಲೀ ನೀನು
ಎಂದಾದರೂ ನೋಡಿರುವಿಯಾ?
18 ಯೋಬನೇ, ಭೂಮಿಯ ವಿಶಾಲತೆಯನ್ನು ನೋಡಿ
ರುವಿಯಾ? ನೀನು ನಿಜವಾಗಿಯೂ ಅರ್ಥಮಾಡಿ
ಕೊಳ್ಳುವಿಯಾ? ನಿನಗೆ ಇದೆಲ್ಲಾ ತಿಳಿದಿದ್ದರೆ, ನನಗೆ
ಹೇಳು.
19 ‘‘ಯೋಬನೇ, ಬೆಳಕು ಎಲ್ಲಿಂದ ಬರುತ್ತದೆ?
ಕತ್ತಲೆಯು ಎಲ್ಲಿಂದ ಬರುತ್ತದೆ?
20 ಯೋಬನೇ, ಬೆಳಕನ್ನೂ ಕತ್ತಲೆಯನ್ನೂ ಅವುಗಳ
ಉಗಮ ಸ್ಥಳಕ್ಕೆ ತೆಗೆದುಕೊಂಡು ಹೋಗ
ಬಲ್ಲೆಯಾ? ಅಲ್ಲಿಗೆ ಹೋಗುವ ಮಾರ್ಗ ನಿನಗೆ
ಗೊತ್ತಿದೆಯೋ?
21 ಯೋಬನೇ, ಇವು ನಿನಗೆ ತಿಳಿದಿವೆ. ಯಾಕಂದರೆ
ನೀನು ಬಹು ವೃದ್ಧನೂ ಜ್ಞಾನಿಯೂ ಆಗಿರುವೆ.
ನಾನು ಅವುಗಳನ್ನು ನಿರ್ಮಿಸಿದಾಗ ನೀನು ಅಲ್ಲಿ
ವಾಸವಾಗಿರಲಿಲ್ಲವೇ?
22 ‘‘ಯೋಬನೇ, ನಾನು ಹಿಮವನ್ನೂ ಆಲಿಕಲ್ಲನ್ನೂ
ಇಟ್ಟಿರುವ ಉಗ್ರಾಣಗಳೊಳಗೆ ನೀನು ಎಂದಾ
ದರೂ ಹೋಗಿರುವಿಯಾ?
23 ಇಕ್ಕಟ್ಟಿನ ಕಾಲಕ್ಕಾಗಿಯೂ ಯುದ್ಧ ಕದನಗಳ ಕಾಲ
ಕ್ಕಾಗಿಯೂ ನಾನು ಅವುಗಳನ್ನು ಕೂಡಿಸಿ ಟಿದ್ದೇನೆ.
24 ಯೋಬನೇ, ಸೂರ್ಯನು ಹೊರಟ ಸ್ಥಳಕ್ಕೂ
ಪೂರ್ವದಿಕ್ಕಿನ ಗಾಳಿಯು ಭೂಮಿಯ ಮೇಲೆಲ್ಲಾ
ಬೀಸುವುದಕ್ಕಾಗಿ ಹೊರಟು ಬರುವ ಸ್ಥಳಕ್ಕೂ
ನೀನು ಎಂದಾದರೂ ಹೋಗಿರುವಿಯಾ?
25 ಯೋಬನೇ, ದೊಡ್ಡ ಮಳೆಗಾಗಿ ಆಕಾಶದಲ್ಲಿ ಅಗೆದು
ಸುರಂಗಮಾಡಿದವರು ಯಾರು? ಗುಡುಗು
ಮಿಂಚಿನ ಮಳೆಗೆ ಹಾದಿಯನ್ನು ಮಾಡಿದವರು
ಯಾರು?
26-27 ಯೋಬನೇ, ಯಾರೂ ವಾಸಿಸದಿರುವ ಸ್ಥಳದಲ್ಲಿ
ನೀರು ಇರುವಂತೆಯೂ ಆ ನೀರು ಬರಿದಾದ ಸ್ಥಳ
ವನ್ನು ತೃಪ್ತಿಪಡಿಸಿ ಬಹಳ ಹುಲ್ಲಿನಿಂದ ಅದನ್ನು
ಹಸರುಗೊಳಿಸುವಂತೆಯೂ ಇವುಗಳನ್ನೆಲ್ಲಾ
ಮಾಡಿದವರು ಯಾರು?
28 ಯೋಬನೇ ಮಳೆಗೆ ತಂದೆಯಿರುವನೇ? ಇಬ್ಬ
ನಿಯ ಹನಿಗಳನ್ನು ಸಲಹಿದವರು ಯಾರು?
29 ಯೋಬನೇ, ಮಂಜಿನ ತಾಯಿಯು ಯಾರು?
30 ನೀರು ಕಲ್ಲಿನಂತೆ ಗಟ್ಟಿಯಾದಾಗ, ಸಾಗರಗಳ
ಮೇಲ್ಭಾಗವು ಹೆಪ್ಪುಗಟ್ಟಿದಾಗ ಆಕಾಶದ ಹಿಮಕ್ಕೆ
ಜನನ ಕೊಡುವವರು ಯಾರು?
31 ‘‘ಯೋಬನೇ, ಪ್ಲೆಅಡ್ಸ್ ಎಂಬ ನಕ್ಷತ್ರಗುಂಪನ್ನು
ನೀನು ಕಟ್ಟಬಲ್ಲೆಯಾ? ನೀನು ಒರೈಅನ್ ನಕ್ಷತ್ರ
ಗುಂಪಿನ ನಡುಪಟ್ಟಿಯನ್ನು ಬಿಚ್ಚಬಲ್ಲೆಯಾ?
32 ಯೋಬನೇ, ನೀನು ಸಮಯಕ್ಕೆ ಸರಿಯಾಗಿ ನಕ್ಷತ್ರ
ರಾಶಿಗಳನ್ನು ಬರಮಾಡಬಲ್ಲೆಯಾ? ನೀನು ಬೇರ್
ನಕ್ಷತ್ರ ಗುಂಪನ್ನು ಅದರ ಮರಿಗಳೊಂದಿಗೆ ನಡೆಸ
ಬಲ್ಲೆಯಾ?
33 ಯೋಬನೇ, ಆಕಾಶವನ್ನು ಆಳುವ ನಿಯಮಗಳು
ನಿನಗೆ ಗೊತ್ತಿವೆಯೋ? ಅವುಗಳ ಆಳ್ವಿಕೆಯನ್ನು
ನೀನು. ಭೂಮಿಯ ಮೇಲೆ ಆರಂಭಿಸ
ಬಲ್ಲೆಯಾ?
34 ‘‘ಯೋಬನೇ, ನೀನು ಮೋಡಗಳಿಗೆ ಮಹಾಧ್ವನಿ
ಯಿಂದ ಆಜ್ಞಾಪಿಸಿ ಅವು ನಿನ್ನನ್ನು ದೊಡ್ಡ ಮಳೆ
ಯಿಂದ ಆವರಿಸಿಕೊಳ್ಳುವಂತೆ ಮಾಡ ಬಲ್ಲೆಯಾ?
35 ಯೋಬನೇ, ನೀನು ಸಿಡಿಲಿಗೆ ಆಜ್ಞಾಪಿಸ
ಬಲ್ಲೆಯಾ? ಅದು ನಿನ್ನ ಬಳಿಗೆ ಬಂದು,
‘ಇಗೋ ಬಂದಿದ್ದೇನೆ; ತಮಗೇನಾಗಬೇಕು?’
ಎನ್ನುವುದೇ?
36 ‘ಯೋಬನೇ, ಮನುಷ್ಯರನ್ನು ಜ್ಞಾನಿಗಳನ್ನಾಗಿ
ಮಾಡುವವರು ಯಾರು? ಅವರ ಅಂತರಾಳದಲ್ಲಿ
ಜ್ಞಾನವನ್ನು ಇಡುವವರು ಯಾರು?
37 ಮೋಡಗಳನ್ನು ಲೆಕ್ಕಿಸಿ ಮಳೆ ಸುರಿಸಲು ಅವು
ಗಳನ್ನು ಮೊಗಚಿಹಾಕಿ
38 ಧೂಳನ್ನು ಮಣ್ಣನ್ನಾಗಿಯೂ ಹೆಂಟೆಗಳು ಒಂದ
ಕ್ಕೊಂದು ಅಂಟಿಕೊಳ್ಳುವಂತೆಯೂ ಮಾಡುವ
ಜ್ಞಾನಿಯು ಯಾರು?
39-40 ಯೋಬನೇ, ಹೆಣ್ಣುಸಿಂಹಕ್ಕೆ ನೀನು ಆಹಾರವನ್ನು
ಹುಡುಕುವೆಯಾ? ಗವಿಗಳಲ್ಲಿ ಮಲಗಿಕೊಂಡಿ
ರುವ ಸಿಂಹಗಳಿಗೂ ಪೊದೆಯಲ್ಲಿ ಹೊಂಚು
ಹಾಕುತ್ತಿರುವ ಪ್ರಾಯದ ಸಿಂಹಗಳಿಗೂ ನೀನು
ಉಣಿಸಬಲ್ಲೆಯಾ?
41 ಕಾಗೆಗಳು ಆಹಾರವಿಲ್ಲದೆ ಅಲೆದಾಡುತ್ತಿರಲು
ಅವುಗಳ ಮರಿಗಳು ದೇವರಿಗೆ ಮೊರೆಯಿಡುವಾಗ
ಅವುಗಳಿಗೆ ಆಹಾರವನ್ನು ಒದಗಿಸುವವರು
ಯಾರು?

39 ‘‘ಯೋಬನೇ, ಬೆಟ್ಟದ ಆಡುಗಳು
ಯಾವಾಗ ಹುಟ್ಟುತ್ತವೆ ಎಂಬುದು ನಿನಗೆ
ಗೊತ್ತಿದೆಯೋ? ತಾಯಿ ಜಿಂಕೆಯು ಮರಿ ಈಯು
ವಾಗ ನೀನು ಸಹಾಯ ಮಾಡಬಲ್ಲೆಯಾ?

2 ಬೆಟ್ಟದ ಮೇಕೆಯೂ ಜಿಂಕೆಯೂ ತಮ್ಮ ಮರಿಗಳನ್ನು ಹೊಟ್ಟೆಯಲ್ಲಿ ಎಷ್ಟು ತಿಂಗಳವರೆಗೆ ಹೊತ್ತುಕೊಂಡಿರುತ್ತವೆ ಎಂಬುದು ನಿನಗೆ ಗೊತ್ತಿದೆಯೋ? ಅವುಗಳು ಹುಟ್ಟುವುದಕ್ಕೆ ಸರಿ ಯಾದ ಸಮಯ ಯಾವುದೆಂದು ನಿನಗೆ ಗೊತ್ತಿದೆಯೋ?
3 ಅವು ಬಗ್ಗಿಕೊಂಡು ಮರಿಗಳನ್ನು ಈಯುತ್ತವೆ; ಬಳಿಕ ಅವುಗಳ ಪ್ರಸವವೇದನೆ ಕೊನೆಗೊಳ್ಳುತ್ತದೆ.
4 ಬೆಟ್ಟದ ಮೇಕೆ ಮರಿಗಳೂ ಜಿಂಕೆಯ ಮರಿಗಳೂ ಬಯಲುಗಳಲ್ಲಿ ಪುಷ್ಟಿಯಾಗಿ ಬೆಳೆಯುತ್ತವೆ. ಬಳಿಕ ಅವು ತಮ್ಮ ತಾಯಂದಿರನ್ನು ಬಿಟ್ಟುಹೋಗುತ್ತವೆ; ಹಿಂತಿರುಗಿ ಬರುವುದೇ ಇಲ್ಲ.
5 ‘‘ಯೋಬನೇ, ಸ್ವತಂತ್ರವಾಗಿರುವಂತೆ ಕಾಡುಕತ್ತೆಗಳನ್ನು ಕಳುಹಿಸಿದವರು ಯಾರು? ಅವುಗಳ ಹಗ್ಗಗಳನ್ನು ಬಿಚ್ಚಿ, ಅವುಗಳನ್ನು ಬಿಟ್ಟುಬಿಟ್ಟವರು ಯಾರು?

6 ಕಾಡುಕತ್ತೆಗೆ ಅಡವಿಯನ್ನು ಮನೆಯನ್ನಾಗಿ ಕೊಟ್ಟವನೇ ನಾನು. ಅವುಗಳಿಗೆ ಉಪ್ಪುಭೂಮಿಯನ್ನು ವಾಸಿಸುವ ಸ್ಥಳವನ್ನಾಗಿ ಕೊಟ್ಟವನೇ ನಾನು.
7 ಕಾಡುಕತ್ತೆಯು ಗದ್ದಲವಿರುವ ಊರುಗಳ ಸಮೀಪಕ್ಕೂ ಹೋಗುವುದಿಲ್ಲ, ಯಾರೂ ಅವುಗಳನ್ನು ಪಳಗಿಸಿ ದುಡಿಸುವುದಿಲ್ಲ .
8 ಕಾಡುಕತ್ತೆಗಳು ಬೆಟ್ಟಗಳಲ್ಲಿ ವಾಸಿಸುತ್ತವೆ. ಹಸಿರಾದ ಏನನ್ನಾದರೂ ತಿನ್ನುವುದಕ್ಕೆ ಅವು ಅಲ್ಲಿಯೇ ಹುಡುಕುತ್ತವೆ.
9 ಯೋಬನೇ, ಕಾಡುಕೋಣಕ್ಕೆ ಮೂಗುದಾರವನ್ನು ಕಟ್ಟಿ ನಿನ್ನ ಹೊಲವನ್ನು ಉಳುವಂತೆ ಮಾಡಬಲ್ಲೆಯಾ? ತಗ್ಗುಭೂಮಿಯಲ್ಲಿ ಕುಂಟೆ ಹೊಡೆಯಬಲ್ಲೆಯಾ?
10 ಕಾಡುಕೋಣವನ್ನು ಹಗ್ಗದಿಂದ ಕಟ್ಟಿ ಭೂಮಿಯನ್ನು ಉಳುಮೆ ಮಾಡಬಲ್ಲೆಯಾ? ಆದು ತಗ್ಗುಗಳಲ್ಲಿ ನಿನ್ನನ್ನು ಹಿಂಬಾಲಿಸಿ ಕುಂಟೆ ಎಳೆಯುವುದೋ?
11 ನಿನ್ನ ಬೇಸಾಯಕ್ಕೆ ಕಾಡುಕೋಣದ ಶಕ್ತಿಯನ್ನು ಅವಲಂಭಿಸಿಕೊಳ್ಳಬಲ್ಲೆಯಾ? ಪ್ರಯಾಸದ ಕೆಲಸವನ್ನು ಅದು ಮಾಡಬೇಕೆಂದು ಅಪೇಕ್ಷಿಸುವೆಯಾ?
12 ಅದು ನಿನ್ನ ಬೆಳೆಯನ್ನು ಕೂಡಿಸಿ, ನಿನ್ನ ಕಣಕ್ಕೆ ಹೊತ್ತುಕೊಂಡು ಬರುವುದೆಂದು ಭರವಸವಿಡುವಿಯಾ?
13 ‘‘ಉಷ್ಟ್ರಪಕ್ಷಿಯು ಸಂತೋಷದಿಂದ ತನ್ನ ರೆಕ್ಕೆಗಳನ್ನು ಬಡಿದಾಡುವುದು. ಆದರೆ ಅದರ ರೆಕ್ಕೆಗಳು ಕೊಕ್ಕರೆಯ ರೆಕ್ಕೆಗಳಿಗೆ ಸರಿಹೋಲುವುದಿಲ್ಲ.
14 ಉಷ್ಟ್ರಪಕ್ಷಿಯು ನೆಲದ ಮೇಲೆ ಮೊಟ್ಟೆಗಳನ್ನು ಇಡುತ್ತದೆ; ಮೊಟ್ಟೆಗಳು ಮರಳಿನಲ್ಲಿ ಕಾವು ಪಡೆಯುತ್ತವೆ.
15 ಆ ಮೊಟ್ಟೆಗಳನ್ನು ಮನುಷ್ಯರಾಗಲೀ ಪ್ರಾಣಿಗಳಾಗಲೀ ತುಳಿಯಬಹುದೆಂಬುದನ್ನು ಆ ಉಷ್ಟ್ರಪಕ್ಷಿಯು ಮರೆತುಬಿಡುತ್ತದೆ.
16 ಉಷ್ಟ್ರ ಪಕ್ಷಿಯು ತನ್ನ ಮರಿಗಳನ್ನು ಕಡೆಗಣಿಸಿ ತನ್ನ ಮರಿಗಳಲ್ಲವೆಂಬಂತೆ ವರ್ತಿಸುತ್ತದೆ; ಮರಿಗಳು ಸತ್ತುಹೋದರೆ ತನ್ನ ಪ್ರಯಾಸವು ವ್ಯರ್ಥವಾಯಿತೆಂಬ ಚಿಂತೆಯೂ ಅದಕ್ಕಿಲ್ಲ.
17 ಯಾಕಂದರೆ ನಾನು ಉಷ್ಟ್ರಪಕ್ಷಿಗೆ ಜ್ಞಾನವನ್ನು ಕೊಡಲಿಲ್ಲ. ಉಷ್ಟ್ರಪಕ್ಷಿಯು ಮೂಢಪಕ್ಷಿಯಾಗಿದೆ, ಅದನ್ನು ಆ ರೀತಿ ನಿರ್ಮಿಸಿದವನು ನಾನೇ.
18 ಆದರೆ ಉಷ್ಟ್ರಪಕ್ಷಿಯು ಓಡಲು ಎದ್ದೇಳುವಾಗ, ಕುದುರೆಯನ್ನೂ ಅದರ ಸವಾರನನ್ನೂ ಕಂಡು ನಗುತ್ತದೆ, ಅದು ಕುದುರೆಗಿಂತಲೂ ವೇಗವಾಗಿ ಓಡಬಲ್ಲದು.
19 ‘‘ಯೋಬನೇ, ನೀನು ಕುದುರೆಗೆ ಶಕ್ತಿಯನ್ನು ಕೊಟ್ಟೆಯಾ? ಅದರ ಕೊರಳಿನ ಮೇಲಿನ ಕೇಸರವನ್ನು* ಕೊಟ್ಟೆಯಾ?
20 ಮಿಡತೆಯು ಕುಪ್ಪಳಿಸುವಂತೆ ನೀನು ಕುದುರೆಯನ್ನೂ ಕುಪ್ಪಳಿಸಬಲ್ಲೆಯಾ? ಅದರ ಗಟ್ಟಿಯಾದ ಕೆನೆತ* ಜನರನ್ನು ಭಯಗೊಳಿಸುತ್ತದೆ.
21 ಕುದುರೆಯು ತನಗಿರುವ ಬಹು ಬಲದಲ್ಲಿ ಸಂತೋಷಪಡುತ್ತದೆ; ತನ್ನ ಪಾದದಿಂದ ನೆಲವನ್ನು ಕೆರೆಯುತ್ತದೆ. ಯುದ್ಧಕ್ಕೆ ವೇಗವಾಗಿ ಓಡುತ್ತಾ ಹೋಗುವುದು.
22 ಕುದುರೆಯು ಭಯವನ್ನು ಕಂಡು ನಗುವುದು. ಆದಕ್ಕೆ ಭಯವಿಲ್ಲ! ಅದು ಯುದ್ಧದಿಂದ ಓಡಿಹೋಗುವುದಿಲ್ಲ.
23 ಕುದುರೆಯ ಪಾರ್ಶ್ವದಲ್ಲಿ ಬತ್ತಳಿಕೆಯು ಅಲುಗಾಡುವುದು. ಕುದುರೆಸವಾರನು ಕೊಂಡೊಯ್ಯುತ್ತಿರುವ ಬರ್ಜಿ ಮತ್ತು ಆಯುಧಗಳು ಸೂರ್ಯನ ಬೆಳಕಿನಲ್ಲಿ ಹೊಳೆಯುತ್ತವೆ.
24 ಕುದುರೆಯು ಬಹು ಉತ್ಸಕತೆಯಿಂದಿರುತ್ತದೆ! ಅದು ನೆಲದ ಮೇಲೆ ವೇಗವಾಗಿ ಓಡುವುದು. ಅದು ತೂತ್ತೂರಿಯ ಧ್ವನಿಯನ್ನು ಕೇಳಿದರೂ ನಿಲ್ಲದು.
25 ತುತ್ತೂರಿಯ ಧ್ವನಿಗೆ ಕುದುರೆಯು, ‘‘ಆಹಾ!’’ ಎಂದು ಹೇಳುತ್ತದೆ. ಅದು ದೂರದಿಂದಲೇ

---

**ಕೇಸರ** ಕುದುರೆಯ ಕುತ್ತಿಗೆ ಮೇಲಿರುವ ಕೂದಲು.

**ಕೆನೆತ** ಕುದುರೆ ಮಾಡುವ ಧ್ವನಿ.

ಯುದ್ಧವನ್ನು ಮೂಸಿನೋಡಿ ತಿಳಿಯುವುದು. ಸೇನಾಧಿಪತಿಗಳು ಗಟ್ಟಿಯಾಗಿ ಅಪ್ಪಣೆಕೊಡುವುದನ್ನೂ ಯುದ್ಧದ ಎಲ್ಲಾ ಕೂಗಾಟವನ್ನೂ ಅದು ಕೇಳಿಸಿಕೊಳ್ಳುತ್ತದೆ.

26 ‘‘ಯೋಬನೇ, ತನ್ನ ರೆಕ್ಕೆಗಳನ್ನು ಚಾಚಿಕೊಂಡು ದಕ್ಷಿಣದ ಕಡೆಗೆ ಹಾರುವ ಗಿಡುಗಕ್ಕೆ ನೀನು ಹಾರುವುದನ್ನು ಕಲಿಸಿದೆಯೋ?

27 ನೀನು ಹದ್ದಿಗೆ ಹಾರಿಹೋಗಿ ಎತ್ತರವಾದ ಬೆಟ್ಟಗಳ ಮೇಲೆ ಗೂಡನ್ನು ಕಟ್ಟಿಕೊಳ್ಳಲು ಆಜ್ಞಾಪಿಸುವೆಯಾ?

28 ಹದ್ದು ಕಡಿದಾದ ಬಂಡೆಯ ಮೇಲೆ ವಾಸಿಸುವುದು. ಕಡಿದಾದ ಬಂಡೆಯು ಹದ್ದಿನ ದುರ್ಗವಾಗಿದೆ.

29 ಹದ್ದು ಆಹಾರಕ್ಕಾಗಿ ತನ್ನ ದುರ್ಗದಿಂದ ನೋಡುತ್ತದೆ. ದೂರದಲ್ಲಿರುವ ಆಹಾರವನ್ನು ಅದು ನೋಡಬಲ್ಲದು.

30 ಹದ್ದಿನ ಮರಿಗಳು ರಕ್ತವನ್ನು ತಿನ್ನುತ್ತವೆ. ಅವು ಸತ್ತದೇಹಗಳ ಸುತ್ತಲೂ ಸೇರಿಕೊಳ್ಳುತ್ತವೆ.’’

40 ಇದಲ್ಲದೆ ಯೆಹೋವನು ಯೋಬನಿಗೆ,

2 ‘‘ಸರ್ವಶಕ್ತನಾದ ದೇವರ ವಿರುದ್ಧ ವ್ಯಾಜ್ಯ ಹೂಡಿದವನು ಆತನನ್ನು ಸರಿಪಡಿಸಬಲ್ಲನೇ? ದೇವರ ಮೇಲೆ ಅಪವಾದ ಹೊರಿಸುವವನು ಆತನಿಗೆ ಉತ್ತರ ನೀಡಲಿ’’ ಎಂದನು.

3 ಆಗ ಯೋಬನು ದೇವರಿಗೆ,

4 ‘‘ನಾನು ಅಲ್ಪನೇ ಸರಿ! ನಾನು ನಿನಗೆ ಉತ್ತರ ಕೊಡಲಾರೆನು! ನನ್ನ ಕೈಯನ್ನು ಬಾಯಿಯ ಮೇಲೆ ಇಟ್ಟುಕೊಳ್ಳುತ್ತೇನೆ.

5 ನಾನು ಒಂದು ಸಲ ಮಾತಾಡಿದ್ದೇನೆ; ಆದರೆ ಪ್ರತಿವಾದ ಮಾಡಲಾರೆನು. ನಾನು ಎರಡು ಸಲ ಮಾತಾಡಿದ್ದೇನೆ; ಆದರೆ ನಾನು ಹೆಚ್ಚಿಗೆ ಏನೂ ಹೇಳಲಾರೆನು.’’ ಎಂದನು.

6 ಆಗ ಯೆಹೋವನು ಬಿರುಗಾಳಿಯೊಳಗಿಂದ ಮತ್ತೆ ಯೋಬನೊಂದಿಗೆ ಮಾತಾಡಿ ಇಂತೆಂದನು:

7 ‘ಯೋಬನೇ, ಪುರುಷನಂತೆ ಎದ್ದುನಿಂತುಕೋ? ನಾನು ನಿನಗೆ ಕೆಲವು ಪ್ರಶ್ನೆಗಳನ್ನು ಕೇಳುವೆನು; ನೀನು ನನಗೆ ಉತ್ತರಕೊಡು.

8 ‘‘ಯೋಬನೇ, ನನ್ನ ನೀತಿಯನ್ನು ಖಂಡಿಸುವಿಯಾ? ನಿನ್ನನ್ನು ನಿರಪರಾಧಿಯೆಂದು ನಿರೂಪಿಸಲು ನನ್ನನ್ನು ದೋಷಿಯೆಂದು ಪರಿಗಣಿಸುವೆಯಾ?

9 ನಿನ್ನ ತೋಳುಗಳು ನನ್ನ ತೋಳುಗಳಂತೆ ಬಲಿಷ್ಠವಾಗಿವೆಯೋ? ನಿನ್ನ ಸ್ವರವನ್ನು ನನ್ನ ಸ್ವರದಂತೆ ಗಟ್ಟಿಯಾಗಿ ಗುಡುಗುಟ್ಟಿಸಬಲ್ಲೆಯಾ?

10 ನೀನು ದೇವರಂತಿದ್ದರೆ ಹೆಮ್ಮೆಪಡು! ನೀನು ದೇವರಂತಿದ್ದರೆ ಘನತೆಯನ್ನೂ ಮಹಿಮೆಯನ್ನೂ ವಸ್ತ್ರಗಳಂತೆ ಧರಿಸಿಕೋ.

11 ನೀನು ದೇವರಂತಿದ್ದರೆ, ನಿನ್ನ ಕೋಪವನ್ನು ತೋರಿ ಗರ್ವಿಷ್ಠರನ್ನು ದಂಡಿಸು; ಅವರನ್ನು ದೀನರನ್ನಾಗಿ ಮಾಡು.

12 ಆ ಗರ್ವಿಷ್ಠರ ಕಡೆಗೆ ನೋಡಿ ಅವರನ್ನು ದೀನರನ್ನಾಗಿ ಮಾಡು. ದುಷ್ಟರನ್ನು ಅವರು ನಿಂತಿರುವಲ್ಲಿಯೇ ಜಜ್ಜಿಹಾಕು.

13 ಗರ್ವಿಷ್ಠರನ್ನೆಲ್ಲಾ ಧೂಳಿನಲ್ಲಿ ಸಮಾಧಿಮಾಡು; ಅವರ ದೇಹಗಳನ್ನು ಸುತ್ತಿ ಅವರ ಸಮಾಧಿಗಳೊಳಗೆ ಹಾಕು.

14 ಯೋಬನೇ, ನೀನು ಇವುಗಳನ್ನೆಲ್ಲಾ ಮಾಡಶಕ್ತನಾಗಿದ್ದರೆ, ನಿನ್ನನ್ನು ರಕ್ಷಿಸಿಕೊಳ್ಳಬಲ್ಲೆ ಎಂದು ನಿನ್ನನ್ನು ಹೊಗಳುವೆನು.

15 ‘‘ಯೋಬನೇ, ಬೆಹೇಮೋತನ್ನು* ನೋಡು. ಅದನ್ನು ನಿರ್ಮಿಸಿದವನು ನಾನೇ; ನಿನ್ನನ್ನು ನಿರ್ಮಿಸಿದವನೂ ನಾನೇ. ಅದು ಹಸುವಿನಂತೆ ಹುಲ್ಲನ್ನು ಮೇಯುತ್ತದೆ.

16 ಅದರ ದೇಹದಲ್ಲಿ ಬಹಳ ಶಕ್ತಿಯಿದೆ. ಅದರ ಹೊಟ್ಟೆಯಲ್ಲಿರುವ ಮಾಂಸ ಖಂಡಗಳು ಬಹು ಶಕ್ತಿಯುತವಾಗಿವೆ.

17 ಅದರ ಬಾಲವು ದೇವದಾರು ಮರದಂತೆ ಬಲವಾಗಿ ನಿಂತುಕೊಳ್ಳುತ್ತದೆ. ಅದರ ಕಾಲಿನ ಮಾಂಸ ಖಂಡಗಳು ಬಹು ಬಲವಾಗಿವೆ.

18 ಅದರ ಎಲುಬುಗಳು ತಾಮ್ರದಂತೆ ಬಲವಾಗಿವೆ. ಅದರ ಕಾಲುಗಳು ಕಬ್ಬಿಣದ ಕಂಬಿಗಳಂತಿವೆ.

19 ನನ್ನಿಂದ ನಿರ್ಮಿತವಾಗಿರುವ ಅತ್ಯದ್ಭುತವಾದ ಪ್ರಾಣಿ ಅದು. ಅದನ್ನು ಸೃಷ್ಟಿಸಿದ ನಾನೊಬ್ಬನೇ ಅದನ್ನು ಕೊಲ್ಲಬಲ್ಲೆನು.

20 ಕಾಡುಪ್ರಾಣಿಗಳು ಆಟವಾಡುವ ಬೆಟ್ಟಗಳ ಮೇಲೆ ಬೆಳೆಯುವ ಹುಲ್ಲನ್ನು ಅದು ತಿನ್ನುತ್ತದೆ.

21 ಅದು ತಾವರೆ ಗಿಡಗಳ ಕೆಳಗೆ ಮಲಗಿಕೊಳ್ಳುತ್ತದೆ; ಕೊಳಚೆಯಲ್ಲಿರುವ ಆಪುಗಳ ನಡುವೆ ಅಡಗಿಕೊಳ್ಳುತ್ತದೆ.

22 ತಾವರೆಗಿಡಗಳು ತಮ್ಮ ನೆರಳಿನಿಂದ ಅದನ್ನು ಮರೆಮಾಡುತ್ತವೆ; ನದಿಯ ಸಮೀಪದಲ್ಲಿ ಬೆಳೆಯುವ ನೀರವಂಜಿ ಮರಗಳ ಕೆಳಗೆ ಅದು ವಾಸಿಸುತ್ತದೆ.

---

**ಬೆಹೇಮೋತ್** ಕೆಲವರು ಇದನ್ನು ನೀರಾನೆಯಂತಲೂ ಬೃಹದಾಕಾರದ ಮೃಗವೆಂತಲೂ ಭಾವಿಸುತ್ತಾರೆ.

23 ನದಿಯು ತುಂಬಿಹರಿದರೂ ಅದು ಓಡಿಹೋಗುವುದಿಲ್ಲ. ಜೋರ್ಡನ್ ನದಿಯು ಅದರ ಮುಖಕ್ಕೆ ರಭಸದಿಂದ ಬಡಿದರೂ ಅದಕ್ಕೆ ಭಯವಿಲ್ಲ.
24 ಅದರ ಕಣ್ಣುಗಳನ್ನು ಕುರುಡುಮಾಡಿ ಅದನ್ನು ಬಂಧಿಸುವುದಕ್ಕಾಗಲೀ ಕೊಂಡಿಗಳಿಂದ ಅದರ ಮೂಗಿಗೆ ಚುಚ್ಚುವುದಕ್ಕಾಗಲೀ ಯಾರಿಗೂ ಸಾಧ್ಯವಿಲ್ಲ.

41 ‘‘ಯೋಬನೇ, ನೀನು ಲಿವ್ಯಾತಾನನನ್ನು* ಗಾಳದಿಂದ ಹಿಡಿಯಬಲ್ಲೆಯಾ? ನೀನು ಅದರ ನಾಲಿಗೆಯನ್ನು ಅದುಮಿ ಹಗ್ಗದಿಂದ ಕಟ್ಟಬಲ್ಲೆಯಾ?
2 ಅದರ ಮೂಗಿನ ಮೂಲಕ ಹಗ್ಗವನ್ನಾಗಲೀ ದವಡೆಗಳ ಮೂಲಕ ಕೊಂಡಿಯನ್ನಾಗಲೀ ಹಾಕಬಲ್ಲೆಯಾ?
3 ತನ್ನನ್ನು ಸ್ವತಂತ್ರವಾಗಿ ಬಿಟ್ಟುಕೊಡಬೇಕೆಂದು ಅದು ನಿನ್ನನ್ನು ಬೇಡಿಕೊಳ್ಳುವುದೇ? ಅದು ನಯವಾದ ಪದಗಳಿಂದ ನಿನ್ನೊಂದಿಗೆ ಮಾತಾಡುತ್ತದೆಯೋ?
4 ಅದು ನಿನ್ನೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳುವುದೇ? ಸದಾಕಾಲ ನಿನ್ನ ಸೇವೆಮಾಡುವುದಾಗಿ ವಾಗ್ದಾನ ಮಾಡುವುದೇ?
5 ನೀನು ಪಕ್ಷಿಯೊಂದಿಗೆ ಆಟವಾಡುವಂತೆ ಅದರ ಜೊತೆಯಲ್ಲಿ ಆಟವಾಡುವಿಯಾ? ನಿನ್ನ ದಾಸಿಯರು ಅದರೊಂದಿಗೆ ಆಟವಾಡಲೆಂದು ಹಗ್ಗದಿಂದ ಅದನ್ನು ಕಟ್ಟಿಹಾಕುವಿಯಾ?
6 ಯೋಬನೇ, ಬೆಸ್ತರು ಅದನ್ನು ನಿನ್ನಿಂದ ಕೊಂಡುಕೊಳ್ಳಲು ಪ್ರಯತ್ನಿಸುವರೇ? ಅವರು ಅದನ್ನು ವರ್ತಕರಿಗೆ ಮಾರುವುದಕ್ಕಾಗಿ ತುಂಡುತುಂಡಾಗಿ ಕತ್ತರಿಸುವರೇ?
7 ನೀನು ಭರ್ಜಿಗಳನ್ನು ಎಸೆದು ಅದರ ಚರ್ಮಕ್ಕೂ ತಲೆಗೂ ನಾಟಿಸಬಲ್ಲೆಯಾ?
8 ‘‘ಯೋಬನೇ, ನೀನು ಅದರ ಮೇಲೆ ನಿನ್ನ ಕೈಯಿಟ್ಟು ನೋಡು. ಆ ಪ್ರಯಾಸದ ಹೋರಾಟವನ್ನು ನೆನಸಿಕೊಂಡರೆ ಅದನ್ನು ನೀನು ಮುಟ್ಟುವುದೇ ಇಲ್ಲ.
9 ನೀನು ಅದನ್ನು ಸೋಲಿಸಬಹುದೆಂದು ಯೋಚಿಸಿಕೊಂಡಿದ್ದರೆ, ಇನ್ನಾದರೂ ಅದನ್ನು ಮರೆತುಬಿಡು! ಅದನ್ನು ನೋಡಿದರೇ ನಿನಗೆ ಭಯವಾಗುತ್ತದೆ!
10 ಅದನ್ನು ಕೋಪಗೊಳಿಸುವಷ್ಟು ಧೈರ್ಯ ಯಾರಿಗೂ ಇಲ್ಲ. ‘‘ಹೀಗಿರುವಲ್ಲಿ ನನಗೆ ವಿರುದ್ಧವಾಗಿ ನಿಂತುಕೊಳ್ಳುವಷ್ಟು ಶಕ್ತಿ ಯಾರಿಗಿದೆ?
11 ನಾನು ಯಾರಿಗೂ ಯಾವ ಸಾಲವನ್ನೂ ತೀರಿಸಬೇಕಿಲ್ಲ. ಆಕಾಶಮಂಡಲದ ಕೆಳಗಿರುವ ಸಮಸ್ತವೂ ನನ್ನದೇ.
12 ‘‘ಯೋಬನೇ, ಲಿವ್ಯಾತಾನನ ಅಂಗಗಳನ್ನೂ ಶಕ್ತಿಯನ್ನೂ ಸೊಗಸಾದ ಆಕಾರನ್ನೂ ನಿನಗೆ ವರ್ಣಿಸುವೆನು.
13 ಯಾವನೂ ಅದರ ಚರ್ಮವನ್ನು ಸುಲಿಯಲಾರನು. ಯಾವನೂ ಅದರ ದವಡೆಗಳಿಗೆ ಚುಚ್ಚಲಾರನು.
14 ಬಲವಂತದಿಂದ ಅದರ ದವಡೆಗಳನ್ನು ತೆರೆಸಲು ಯಾರಿಗೂ ಸಾಧ್ಯವಿಲ್ಲ. ಅದರ ದವಡೆಹಲ್ಲುಗಳು ಜನರನ್ನು ಭಯಗೊಳಿಸುತ್ತವೆ.
15 ಅದರ ಹಿಂಬದಿಯಲ್ಲಿ ಗುರಾಣಿಗಳ ಸಾಲುಗಳು ಒಂದಕ್ಕೊಂದು ಬಿಗಿಯಲ್ಪಟ್ಟು ಮುದ್ರಿತವಾಗಿವೆ.
16 ಗಾಳಿಯೂ ಹಾದುಹೋಗದಂತೆ ಆ ಗುರಾಣಿಗಳು ಜೋಡಿಸಲ್ಪಟ್ಟಿವೆ.
17 ಗುರಾಣಿಗಳು ಒಂದಕ್ಕೊಂದು ಅಂಟಿಕೊಂಡು ಬಿಡಿಸಲು ಅಸಾಧ್ಯವಾಗಿದೆ.
18 ಅದರ ಸೀನಿನ ತುಂತುರುಗಳು ಥಳಥಳಿಸುತ್ತವೆ. ಅದರ ಕಣ್ಣುಗಳು ಮುಂಜಾನೆಯ ಬೆಳಕಿನಂತಿವೆ.
19 ಅದರ ಬಾಯಿಂದ ಉರಿಯುವ ಕೊಳ್ಳಿಗಳು ಹೊರಬರುತ್ತವೆ ಬೆಂಕಿಯ ಜ್ವಾಲೆಗಳು ಹಾರುತ್ತವೆ.
20 ಕಾದಮಡಕೆಯ ಕೆಳಗೆ ಉರಿಯುತ್ತಿರುವ ಆಪು ಹುಲ್ಲಿನಿಂದ ಬರುವ ಹೊಗೆಯಂತೆ ಅದರ ಮೂಗಿನಿಂದ ಹೊಗೆಯು ಹಾಯುವುದು.
21 ಅದರ ಉಸಿರು ಇದ್ದಲ್ಲನ್ನು ಹೊತ್ತಿಸುವುದು; ಜ್ವಾಲೆಗಳು ಅದರ ಬಾಯೊಳಗಿಂದ ಹಾರುವುದು.
22 ಅದರ ಕುತ್ತಿಗೆ ಬಹು ಶಕ್ತಿಯುತವಾಗಿದೆ; ಜನರು ಭಯಗೊಂಡು ಅದರ ಬಳಿಯಿಂದ ಓಡಿಹೋಗುವರು.
23 ಅದರ ಚರ್ಮದಲ್ಲಿ ಯಾವ ಬಲಹೀನತೆಯೂ ಇಲ್ಲ. ಅದು ಕಬ್ಬಿಣದಂತೆ ಗಟ್ಟಿಯಾಗಿದೆ.
24 ಅದರ ಹೃದಯ ಬಂಡೆಯಂತಿದೆ. ಅದಕ್ಕೆ ಭಯವೇ ಇಲ್ಲ. ಬೀಸುವ ಕೆಳಗಲ್ಲಿನಂತೆ ಅದು ಗಟ್ಟಿಯಾಗಿದೆ.
25 ಅದು ಎದ್ದಾಗ ಬಲಿಷ್ಠರು ಭಯಪಡುವರು. ಅದು ತನ್ನ ಬಾಲವನ್ನು ತೂಗಿದರೆ ಅವರು ಓಡಿಹೋಗುವರು.
26 ಅದಕ್ಕೆ ಬಡಿಯುವ ಖಡ್ಗ, ಭರ್ಜಿ ಈಟಿಗಳು ಹಿಂದಕ್ಕೆ ಪುಟಹಾರುತ್ತವೆ. ಯಾವ ಆಯುಧಗಳು ಅದನ್ನು ನೋಯಿಸಲಾರವು!

---

**ಲಿವ್ಯಾತಾನ್** ಇದು ಹೀಬ್ರೂ ಹೆಸರು, ಇದು ಯಾವ ಪ್ರಾಣಿ ಎಂಬುದು ಸರಿಯಾಗಿ ಗೊತ್ತಿಲ್ಲ. ಇದು ಮೊಸಳೆಯಾಗಿದ್ದಿರಬಹುದು ಅಥವಾ ಮಹಾ ಸಮುದ್ರ ಪ್ರಾಣಿಯಾಗಿದ್ದಿರಬಹುದು.

27 ಅದು ಕಬ್ಬಿಣವನ್ನು ಒಣಹುಲ್ಲಿನಂತೆಯೂ ತಾಮ್ರವನ್ನು ಲೊಡ್ಡುಮರದಂತೆಯೂ ಮುರಿದು ಹಾಕುವುದು.
28 ಬಾಣಗಳೂ ಅದನ್ನು ಓಡಿಸಲಾರವು. ಕವಣೆ ಕಲ್ಲುಗಳೂ ಅದಕ್ಕೆ ಒಣಹುಲ್ಲಿನಂತಿವೆ.
29 ಅದು ತನಗೆ ಬಡಿದ ಮರದ ದೊಣ್ಣೆಯನ್ನು ಹುಲ್ಲು ಕಡ್ಡಿಯೆಂದು ಭಾವಿಸಿಕೊಳ್ಳುವುದು. ಮನುಷ್ಯರು ಬಿರುಸಾಗಿ ಎಸೆಯುವ ಭರ್ಜಿಗಳನ್ನು ಕಂಡು ನಗುತ್ತದೆ.
30 ಅದರ ಕೆಳಭಾಗವು ಮಡಕೆಯ ಹರಿತವಾದ ಚೂರುಗಳಂತಿವೆ. ಅದು ನಡೆಯುವಾಗ ಒಕ್ಕಣೆಯ ಸುತ್ತಿಗೆಯಂತೆ ಮಣ್ಣಿನಲ್ಲಿ ಕುಳಿಗಳನ್ನು ಮಾಡುತ್ತದೆ.
31 ಮಡಕೆಯಲ್ಲಿ ಕುದಿಯುತ್ತಿರುವ ನೀರಿನಂತೆಯೂ ಮಡಕೆಯಲ್ಲಿ ಕುದಿಯುತ್ತಿರುವ ಎಣ್ಣೆಯಂತೆಯೂ ಅದು ನೀರನ್ನು ಕುದಿಸುವುದು.
32 ಅದು ಈಜುವಾಗ ಅದರ ಹಿಂದೆ ಒಂದು ದಾರಿಯೇ ನಿರ್ಮಿತವಾಗುವುದು. ಅದು ನೀರನ್ನು ಕಲಕಿ ತನ್ನ ಹಿಂದೆ ಬಿಳಿನೊರೆಯನ್ನು ಉಂಟುಮಾಡುವುದು.
33 ಭೂಮಿಯ ಮೇಲಿರುವ ಯಾವ ಪ್ರಾಣಿಯೂ ಅದರಂತಿಲ್ಲ. ಈ ಪ್ರಾಣಿಯೊಂದೇ ಯಾವುದಕ್ಕೂ ಭಯಪಡದು.
34 ಅತ್ಯಂತ ಗರ್ವಿಷ್ಠ ಪ್ರಾಣಿಗಳನ್ನೂ ಅದು ಕಡೆಗಣಿಸುವುದು. ಅದು ಕ್ರೂರಪ್ರಾಣಿಗಳಿಗೆಲ್ಲಾ ರಾಜನಾಗಿದೆ.''

## ಯೆಹೋವನಿಗೆ ಯೋಬನ ಉತ್ತರ

42 ಆಗ ಯೋಬನು ಯೆಹೋವನಿಗೆ ಪ್ರತ್ಯುತ್ತರವಾಗಿ ಇಂತೆಂದನು;
2 ''ಯೆಹೋವನೇ, ನೀನು ಪ್ರತಿಯೊಂದನ್ನೂ ಮಾಡಬಲ್ಲೆ ಎಂದು ನನಗೆ ಗೊತ್ತದೆ. ನೀನು ಮಾಡಿದ ಆಲೋಚನೆಗಳನ್ನು ಯಾವುದೂ ಬದಲಿಸಲಾರದು; ಯಾವುದೂ ನಿಲ್ಲಿಸಲಾರದು.
3 ಯೆಹೋವನೇ, 'ಈ ಮೂರ್ಖಸಂಗತಿಗಳನ್ನು ಹೇಳುತ್ತಿರುವ ಈ ಮೂಢನು ಯಾರು?' ಎಂದು ನೀನು ಪ್ರಶ್ನಿಸಿದೆ. ನನಗೆ ಅರ್ಥವಾಗಿಲ್ಲದ ಸಂಗತಿಗಳ ಬಗ್ಗೆಯೂ ನಾನು ತಿಳಿಯಲಾಗದಷ್ಟು ಆಶ್ಚರ್ಯಕರವಾದ ಅದ್ಭುತಕಾರ್ಯಗಳ ಬಗ್ಗೆಯೂ ನಾನು ಮಾತಾಡಿದ್ದೇನೆ.
4 'ಯೆಹೋವನೇ, ನೀನು ನನಗೆ, 'ಯೋಬನೇ, ಆಲಿಸು; ನಾನು ಮಾತಾಡುತ್ತೇನೆ. ನಾನು ನಿನಗೆ ಪ್ರಶ್ನೆಗಳನ್ನು ಕೇಳುತ್ತೇನೆ, ನೀನು ನನಗೆ ಉತ್ತರಿಸು' ಎಂದು ಹೇಳಿದೆ.
5 ಯೆಹೋವನೇ, ಮೊದಲಾದರೋ ನಾನು ನಿನ್ನ ಬಗ್ಗೆ ಕೇಳಿದ್ದೆನು; ಈಗಲಾದರೋ ಕಣ್ಣಾರೆ ನಿನ್ನನ್ನು ಕಂಡಿದ್ದೇನೆ.
6 ಯೆಹೋವನೇ, ನನ್ನ ವಿಷಯದಲ್ಲಿ ನನಗೇ ನಾಚಿಕೆಯಾಗಿದೆ. ನನಗೆ ಎಷ್ಟೋ ದುಃಖವಾಗಿದೆ. ನಾನು ಧೂಳಿನಲ್ಲಿಯೂ ಬೂದಿಯಲ್ಲಿಯೂ ಕುಳಿತುಕೊಳ್ಳುತ್ತೇನೆ. ನನ್ನ ಹೃದಯವನ್ನೂ ಜೀವಿತವನ್ನೂ ಮಾರ್ಪಡಿಸಿಕೊಳ್ಳುವುದಾಗಿ ನಾನು ನಿನಗೆ ವಾಗ್ದಾನ ಮಾಡುತ್ತೇನೆ.''

## ಯೋಬನಿಗೆ ದೊರೆತ ಐಶ್ವರ್ಯ

7 ಯೆಹೋವನು ಯೋಬನೊಂದಿಗೆ ಮಾತಾಡಿದ
ಮೇಲೆ, ಎಲೀಫಜನೊಂದಿಗೆ ಮಾತಾಡಿದನು. ಎಲೀಫ
ಜನು ತೇಮಾನ್ ಪಟ್ಟಣದವನಾಗಿದ್ದನು. ಯೆಹೋ
ವನು, ಎಲೀಫಜನಿಗೆ, ''ನಾನು ನಿನ್ನ ಮೇಲೆಯೂ ನಿನ್ನ
ಇಬ್ಬರು ಸ್ನೇಹಿತರ ಮೇಲೆಯೂ ಕೋಪಗೊಂಡಿದ್ದೇನೆ.
ಯಾಕಂದರೆ ನೀವು ನನ್ನ ಬಗ್ಗೆ ಹೇಳಿದವುಗಳು ಸತ್ಯವಲ್ಲ.
ಆದರೆ ಯೋಬನು ನನ್ನ ಬಗ್ಗೆ ಹೇಳಿದವುಗಳು ಸತ್ಯ
ವಾಗಿವೆ. ಯೋಬನು ನನ್ನ ಸೇವಕ.
8 ಆದ್ದರಿಂದ, ಈಗ
ನೀವು (ಮೂವರು) ಏಳು ಹೋರಿಗಳನ್ನೂ ಏಳು ಟಗರು
ಗಳನ್ನೂ ತೆಗೆದುಕೊಂಡು ನನ್ನ ಸೇವಕನಾದ ಯೋಬನ
ಬಳಿಗೆ ಹೋಗಿ ಅವುಗಳನ್ನು ನಿಮಗೋಸ್ಕರ ಸರ್ವಾಂಗ
ಹೋಮಮಾಡಿರಿ. ನನ್ನ ಸೇವಕನಾದ ಯೋಬನು
ನಿಮಗೋಸ್ಕರ ಪ್ರಾರ್ಥಿಸುವನು. ಆಗ ನಾನು ಅವನ
ಪ್ರಾರ್ಥನೆಗೆ ಖಂಡಿತವಾಗಿ ಉತ್ತರಿಸುವೆನು; ನಿಮ್ಮ
ಮೂರ್ಖತನಕ್ಕೆ ಬರಬೇಕಾಗಿದ್ದ ದಂಡನೆಯನ್ನು ಮನ್ನಿಸು
ವೆನು. ನೀವು ನನ್ನ ಬಗ್ಗೆ ಹೇಳಿದವುಗಳು ಸತ್ಯವಲ್ಲ; ಆದರೆ
ನನ್ನ ಸೇವಕನಾದ ಯೋಬನು ಹೇಳಿದವುಗಳು ಸತ್ಯ
ವಾಗಿವೆ.'' ಎಂದನು.

9 ಆಗ ತೇಮಾನ್ ಪಟ್ಟಣದ ಎಲೀಫಜನೂ ಶೂಹ್ಯ
ದೇಶದ ಬಿಲ್ದದನೂ ನಾಮಾಥ್ಯ ದೇಶದ ಚೋಫರನೂ
ಯೆಹೋವನಿಗೆ ವಿಧೇಯರಾದರು. ಯೆಹೋವನು
ಯೋಬನ ಪ್ರಾರ್ಥನೆಗೆ ಉತ್ತರವನ್ನು ನೀಡಿದನು.

10 ಯೋಬನು ತನ್ನ ಸ್ನೇಹಿತರಿಗೋಸ್ಕರ ಪ್ರಾರ್ಥಿಸಿದ
ಮೇಲೆ ಯೆಹೋವನು ಯೋಬನನ್ನು ಅಭಿವೃದ್ಧಿ
ಪಡಿಸಿದನು. ಆತನು ಯೋಬನಿಗೆ, ಮೊದಲಿಗಿಂತ ಎರಡ
ರಷ್ಟು ಹೆಚ್ಚಿಗೆ ಆಸ್ತಿಯನ್ನು ಕೊಟ್ಟನು.
11 ಯೋಬನ
ಸಹೋದರ ಸಹೋದರಿಯರೂ ಅವನ ಪರಿಚಯಸ್ಥರೂ
ಅವನ ಮನೆಗೆ ಬಂದರು; ಅವನೊಂದಿಗೆ ಊಟ ಮಾಡಿ
ದರು; ಯೆಹೋವನು ಅವನಿಗೆ ಬಹಳ ಕಷ್ಟವನ್ನು
ಬರಮಾಡಿದ್ದರಿಂದ ಅವರು ಮರುಕದಿಂದ ಅವನನ್ನು
ಸಂತೈಸಿದರು. ಪ್ರತಿಯೊಬ್ಬರು ಯೋಬನಿಗೆ ಒಂದು

ಬೆಳ್ಳಿಯ ನಾಣ್ಯವನ್ನೂ ಒಂದು ಚಿನ್ನದ ಉಂಗುರವನ್ನೂ
ಕೊಟ್ಟರು.
[12]ಯೆಹೋವನು ಯೋಬನ ಜೀವಿತದ ಅಂತಿಮ
ಸ್ಥಿತಿಯನ್ನು ಮೊದಲನೆ ಸ್ಥಿತಿಗಿಂತಲೂ ಹೆಚ್ಚಾಗಿ ಆಶೀರ್ವ
ದಿಸಿದನು. ಯೋಬನಿಗೆ ಹದಿನಾಲ್ಕು ಸಾವಿರ ಕುರಿ
ಗಳಿದ್ದವು; ಆರು ಸಾವಿರ ಒಂಟೆಗಳಿದ್ದವು; ಒಂದು ಸಾವಿರ
ಜೊತೆ ಎತ್ತುಗಳಿದ್ದವು ಮತ್ತು ಒಂದು ಸಾವಿರ ಹೆಣ್ಣು ಕತ್ತೆ
ಗಳಿದ್ದವು. [13]ಅಲ್ಲದೆ ಯೋಬನು ಏಳು ಗಂಡು ಮಕ್ಕ
ಳನ್ನೂ ಮೂವರು ಹೆಣ್ಣುಮಕ್ಕಳನ್ನೂ ಪಡೆದನು.
[14]ಯೋಬನು ಮೊದಲನೆ ಮಗಳಿಗೆ 'ಯೆಮೀಮ'
ಎಂತಲೂ, ಎರಡನೆಯವಳಿಗೆ 'ಕೆಚೀಯ' ಎಂತಲೂ
ಮೂರನೆಯವಳಿಗೆ 'ಕೆರೆನ್ಹಪ್ಪೂಕ್' ಎಂತಲೂ
ಹೆಸರಿಟ್ಟನು. [15]ಯೋಬನ ಹೆಣ್ಣು ಮಕ್ಕಳು ಇಡೀ ದೇಶ
ದಲ್ಲೇ ಅತ್ಯಂತ ಸೌಂದರ್ಯವುಳ್ಳ ಸ್ತ್ರೀಯರಾಗಿದ್ದರು.
ಯೋಬನು ತನ್ನ ಗಂಡುಮಕ್ಕಳಿಗೆ ಆಸ್ತಿಯನ್ನು ಕೊಟ್ಟಂತೆ
ತನ್ನ ಹೆಣ್ಣುಮಕ್ಕಳಿಗೂ ಕೊಟ್ಟನು.
[16]ಆ ಮೇಲೆ ಯೋಬನು ನೂರನಲವತ್ತು ವರ್ಷಗಳ
ಕಾಲ ಬದುಕಿದ್ದನು. ಅವನು ತನ್ನ ಮಕ್ಕಳನ್ನೂ ಮೊಮ್ಮಕ್ಕ
ಳನ್ನೂ ಮರಿಮಕ್ಕಳನ್ನೂ ಮರಿಮೊಮ್ಮಕ್ಕಳನ್ನೂ ಮರಿ
ಮೊಮ್ಮಕ್ಕಳಿಗೆ ಹುಟ್ಟಿದ ಮಕ್ಕಳನ್ನೂ ಕಣ್ಣಾರೆಕಂಡನು.
[17]ತರುವಾಯ ಯೋಬನು ಮುಪ್ಪಿನ ಮುದುಕನಾಗಿ
ತೀರಿಕೊಂಡನು.

# ಕೀರ್ತನೆಗಳು

## ಮೊದಲನೆ ಭಾಗ

### ಕೀರ್ತನೆ 1

1 ಯಾವನು ದುಷ್ಟರ ಸಲಹೆಯನ್ನು ಅನುಸರಿಸದೆ, ಪಾಪಿಗಳಂತೆ ಜೀವಿಸದೆ, ದೇವರಿಗೆ ಅವಿಧೇಯರಾದ ಜನರೊಂದಿಗೆ ಸೇರದೆ ಇರುವನೋ ಅವನೇ ಭಾಗ್ಯವಂತನು.

2 ನೀತಿವಂತನಾದ ಅವನು ಯೆಹೋವನ ಉಪದೇಶಗಳಲ್ಲಿ ಆನಂದಿಸುತ್ತಾ ಅವುಗಳನ್ನೇ ಹಗಲಿರುಳು ಧ್ಯಾನಿಸುವನು.

3 ಅವನು ಕಾಲುವೆಗಳ ಬಳಿಯಲ್ಲಿ ಹುಲುಸಾಗಿ ಬೆಳೆದಿರುವ ಮರದಂತಿರುವನು. ಆ ಮರವು ತಕ್ಕಕಾಲದಲ್ಲಿ ಫಲಿಸುವುದು; ಬಾಡದ ಎಲೆಗಳಿಂದ ಯಾವಾಗಲೂ ತುಂಬಿರುವುದು. ಅಂತೆಯೇ ಅವನ ಕಾರ್ಯಗಳೆಲ್ಲಾ ಸಫಲವಾಗುವವು.

4 ದುಷ್ಟರಾದರೊ ಹಾಗಲ್ಲ! ಅವರು ಗಾಳಿ ಬಡಿದುಕೊಂಡು ಹೋಗುವ ಹೊಟ್ಟಿನಂತಿರುವರು.

5 ನೀತಿವಂತರು ನ್ಯಾಯ ನಿರ್ಣಯಿಸುವಾಗ ಪಾಪಿಗಳಿಗೂ ದುಷ್ಟರಿಗೂ ಅಪರಾಧಿಗಳೆಂದು ತೀರ್ಪಾಗುವುದು.

6 ಯೆಹೋವನು ನೀತಿವಂತರನ್ನು ಸಂರಕ್ಷಿಸುವನು; ದುಷ್ಟರನ್ನಾದರೊ ನಾಶಪಡಿಸುವನು.

### ಕೀರ್ತನೆ 2

1 ಅನ್ಯಜನಾಂಗಗಳು ಕೋಪಗೊಂಡಿರುವುದೇಕೆ? ಅವರು ಮೂರ್ಖತನದ ಸಂಚುಗಳನ್ನು ಮಾಡುತ್ತಿರುವುದೇಕೆ?

2 ಅವುಗಳ ರಾಜರುಗಳೂ ನಾಯಕರುಗಳೂ ಯೆಹೋವನಿಗೂ ಆತನಿಂದ ಅಭಿಷೇಕಿಸಲ್ಪಟ್ಟವನಿಗೂ ವಿರೋಧವಾಗಿ ಕೂಡಿಬಂದಿದ್ದಾರೆ.

3 ‘‘ದೇವರಿಗೂ ಆತನು ಅಭಿಷೇಕಿಸಿದ ರಾಜನಿಗೂ ವಿರೋಧವಾಗಿ ದಂಗೆ ಎದ್ದು ಸ್ವತಂತ್ರರಾಗೋಣ’’ ಎಂದು ಅವರು ಮಾತಾಡಿಕೊಳ್ಳುತ್ತಿದ್ದಾರೆ.

4 ಆದರೆ ಒಡೆಯನೂ ಪರಲೋಕದ ರಾಜನೂ ಅವರನ್ನು ನೋಡಿ ನಗುವನು,

5-6 ‘‘ಇವನನ್ನು ರಾಜನನ್ನಾಗಿ ಅಭಿಷೇಕಿಸದವನು ನಾನೇ. ನನ್ನ ಪವಿತ್ರ ಪರ್ವತವಾದ ಚಿಯೋನಿನಲ್ಲಿ ಆಳುವವನು ಇವನೇ’’ ಎಂದು ಅವರಿಗೆ ಕೋಪದಿಂದ ಉತ್ತರಿಸುವನು. ಆಗ ಅವರೆಲ್ಲರೂ ಭಯಗೊಳ್ಳುವರು.

7 ಯೆಹೋವನ ಒಡಂಬಡಿಕೆಯ ಕುರಿತು ಹೇಳುತ್ತಿರುವೆ. ಆತನು ನನಗೆ , ‘‘ಈ ಹೊತ್ತು ನಾನು ನಿನಗೆ ತಂದೆಯಾದೆ! ನೀನೇ ನನ್ನ ಮಗನು.

8 ನೀನು ಕೇಳಿಕೊಂಡರೆ ಅನ್ಯಜನಾಂಗಗಳನ್ನು ನಿನಗೆ ಅಧೀನಪಡಿಸುವೆನು. ಭೂಮಿಯ ಮೇಲಿರುವ ಜನರೆಲ್ಲರೂ ನಿನ್ನವರಾಗುವರು!

9 ಕಬ್ಬಿಣದ ಸಲಾಕೆಯು ಮಣ್ಣಿನ ಮಡಿಕೆಯನ್ನು ನುಚ್ಚುನೂರು ಮಾಡುವಂತೆ ನೀನು ಅನ್ಯಜನಾಂಗಗಳನ್ನು ನಾಶಪಡಿಸುವೆ’’ ಎಂದು ಹೇಳಿದನು.

10 ಆದ್ದರಿಂದ ರಾಜರುಗಳೇ, ವಿವೇಕಿಗಳಾಗಿರಿ. ಅಧಿಪತಿಗಳೇ, ಬುದ್ಧಿಮಾತುಗಳಿಗೆ ಕಿವಿಗೊಡಿರಿ.

11 ಯೆಹೋವನಿಗೆ ಭಯಭಕ್ತಿಯಿಂದ ವಿಧೇಯರಾಗಿರಿ.

12 ಆತನ ಮಗನಿಗೆ ನಂಬಿಗಸ್ತರಾಗಿರಿ. ಇಲ್ಲವಾದರೆ ಆತನು ಕೋಪದಿಂದ ನಿಮ್ಮನ್ನು ನಾಶಪಡಿಸುವನು. ಯೆಹೋವನನ್ನು ಆಶ್ರಯಿಸಿಕೊಂಡಿರುವವರು ಭಾಗ್ಯವಂತರೇ ಸರಿ! ಆದರೆ ಅನ್ಯಜನರು ಎಚ್ಚರಿಕೆಯಿಂದಿರಲಿ; ಆತನ ಕೋಪವು ಬೇಗನೆ ತೋರಿಬರಲಿದೆ.

### ಕೀರ್ತನೆ 3

*ದಾವೀದನು ತನ್ನ ಮಗನಾದ ಅಬ್ಷಾಲೋಮನಿಂದ ಓಡಿಹೋದಾಗ ರಚಿಸಲ್ಪಟ್ಟಿತು. ರಚನೆಗಾರ: ದಾವೀದ*

1 ‘‘ಯೆಹೋವನೇ, ನನಗೆ ವೈರಿಗಳು ಎಷ್ಟೋ ಹೆಚ್ಚಾಗಿದ್ದಾರೆ. ಎಷ್ಟೋ ಜನರು ನನಗೆ ಶತ್ರುಗಳಾಗಿ ನಿಂತಿದ್ದಾರೆ.

2 ಅನೇಕರು ನನ್ನ ಬಗ್ಗೆ ಮಾತಾಡುತ್ತಾ ‘‘ದೇವರು ಅವನನ್ನು ರಕ್ಷಿಸುವುದಿಲ್ಲ!’’ ಎಂದು ಹೇಳುತ್ತಿದ್ದಾರೆ.

3 ಆದರೆ ಯೆಹೋವನೇ, ನೀನೇ ನನ್ನ ಗುರಾಣಿ. ನೀನೇ ನನ್ನ ಗೌರವಕ್ಕೆ ಆಧಾರ. ನನ್ನನ್ನು ಜಯವೀರನನ್ನಾಗಿ ಮಾಡು.

4 ನಾನು ಯೆಹೋವನಿಗೆ ಪ್ರಾರ್ಥಿಸಲು, ಆತನು ತನ್ನ ಪವಿತ್ರ ಪರ್ವತದಿಂದ ಉತ್ತರಿಸುವನು.
5 ಯೆಹೋವನು ನನ್ನನ್ನು ಕಾಪಾಡುವುದರಿಂದ ನಾನು ಸುಖವಾಗಿ ನಿದ್ರಿಸಿ ಎಚ್ಚರಗೊಳ್ಳುವೆನು.
6 ಸಾವಿರಾರು ಶತ್ರು ಸೈನಿಕರು ನನ್ನನ್ನು ಮುತ್ತಿಕೊಂಡರೂ ನನಗೆ ಭಯವಿಲ್ಲ.
7 ಯೆಹೋವನೇ, ಎದ್ದೇಳು! ನನ್ನ ದೇವರೇ, ಬಂದು ನನ್ನನ್ನು ರಕ್ಷಿಸು! ನೀನು ನನ್ನ ಶತ್ರುಗಳ ದವಡೆಗೆ ಬಡಿದರೆ ಅವರ ಹಲ್ಲುಗಳು ಉದುರಿಹೋಗುತ್ತವೆ.
8 ಯೆಹೋವನು ತನ್ನ ಜನರನ್ನು ರಕ್ಷಿಸಬಲ್ಲನು. ಯೆಹೋವನೇ, ದಯವಿಟ್ಟು ನಿನ್ನ ಜನರಿಗೆ ಒಳ್ಳೆಯದನ್ನು ಮಾಡು.

## ಕೀರ್ತನೆ 4

*ರಚನೆಗಾರ: ದಾವೀದ*

1 ನೀತಿಸ್ವರೂಪನಾದ ದೇವರೇ, ನನ್ನ ಪ್ರಾರ್ಥನೆಗೆ ಉತ್ತರಿಸು! ನನ್ನ ಮೊರೆಗೆ ಕಿವಿಗೊಟ್ಟು ನನ್ನನ್ನು ಕರುಣಿಸು! ಇಕ್ಕಟ್ಟುಗಳಿಂದ ನನ್ನನ್ನು ಬಿಡಿಸು!
2 ಜನರೇ, ಇನ್ನೆಷ್ಟರವರೆಗೆ ನನ್ನ ಬಗ್ಗೆ ಕೆಟ್ಟದ್ದನ್ನು ಹೇಳುವಿರಿ? ಅಸತ್ಯವನ್ನೇ ಪ್ರೀತಿಸುತ್ತಾ, ನನ್ನ ಮೇಲೆ ಹೊರಿಸಲು ಸುಳ್ಳು ಅಪವಾದಗಳಿಗಾಗಿ ಯಾಕೆ ಹುಡುಕುತ್ತಿದ್ದೀರಿ?
3 ಯೆಹೋವನು ತನ್ನ ಭಕ್ತನನ್ನು ತನಗೋಸ್ಕರ ಪ್ರತ್ಯೇಕಿಸಿಕೊಂಡಿದ್ದಾನೆಂಬುದು ನಿಮಗೆ ತಿಳಿದಿರಲಿ. ನಾನು ಮೊರೆಯಿಡುವಾಗಲೆಲ್ಲಾ ಆತನು ನನಗೆ ಕಿವಿಗೊಡುತ್ತಾನೆ.
4 ನೀವು ಕೋಪದಿಂದಿರುವಾಗ ಎಚ್ಚರಿಕೆಯಾಗಿದ್ದು ಪಾಪ ಮಾಡದಿರಿ. ಹಾಸಿಗೆಯ ಮೇಲಿರುವಾಗ ಹೃದಯಗಳನ್ನು ಪರೀಕ್ಷಿಸಿಕೊಳ್ಳಿರಿ.
5 ದೇವರಿಗೆ ಯೋಗ್ಯವಾದ ಯಜ್ಞಗಳನ್ನು ಅರ್ಪಿಸಿರಿ; ಯೆಹೋವನಲ್ಲಿಯೇ ಭರವಸೆಯಿಡಿರಿ!
6 ‘‘ನಮಗೆ ಒಳ್ಳೆಯದನ್ನು ಯಾರು ತೋರಿಸುವರು? ಯೆಹೋವನೇ, ನಿನ್ನ ಪ್ರಕಾಶಮಾನವಾದ ಮುಖವನ್ನು ನಾವು ನೋಡುವಂತಾಗಲಿ!’’ ಎಂದು ಅನೇಕರು ಅಂದುಕೊಳ್ಳುವರು.
7 ಧಾನ್ಯಗಳೂ ದ್ರಾಕ್ಷಿಯೂ ಸಮೃದ್ಧಿಯಾಗಿ ಬೆಳೆದ ಸುಗ್ಗಿಕಾಲದಲ್ಲಿ ಜನರಲ್ಲಿರುವ ಸಂತೋಷಕ್ಕಿಂತಲೂ ಅಧಿಕವಾದ ಆನಂದವನ್ನು ನೀನು ನನ್ನ ಹೃದಯದಲ್ಲಿ ತುಂಬಿರುವೆ.
8 ನಾನು ಹಾಸಿಗೆಯ ಮೇಲೆ ಸಮಾಧಾನದಿಂದ ನಿದ್ರಿಸುವೆನು. ಯಾಕಂದರೆ, ಯೆಹೋವನೇ, ನನ್ನನ್ನು ಕಾಪಾಡುವಾತನು ನೀನೇ.

## ಕೀರ್ತನೆ 5

*ರಚನೆಗಾರ: ದಾವೀದ*

1 ಯೆಹೋವನೇ, ನನ್ನ ಮಾತುಗಳಿಗೆ ಕಿವಿಗೊಡು. ನನ್ನ ಆಲೋಚನೆಗಳಿಗೆ ಗಮನಕೊಡು.
2 ನನ್ನ ರಾಜನೇ, ನನ್ನ ದೇವರೇ, ನಿನಗೇ ಮೊರೆಯಿಡುವೆನು.
3 ಯೆಹೋವನೇ, ಪ್ರತಿಮುಂಜಾನೆ ನಿನಗೆ ಕಾಣಿಕೆಗಳನ್ನು ಅರ್ಪಿಸಿ ಸಹಾಯಕ್ಕಾಗಿ ಎದುರು ನೋಡುವೆನು; ಪ್ರತಿಮುಂಜಾನೆ ನೀನು ನನ್ನ ಪ್ರಾರ್ಥನೆಗಳಿಗೆ ಕಿವಿಗೊಡುವೆ.
4 ನೀನು ದುಷ್ಟತ್ವದಲ್ಲಿ ಸಂತೋಷಿಸುವ ದೇವರಲ್ಲ. ನಿನ್ನ ಸನ್ನಿಧಿಯಲ್ಲಿ ದುಷ್ಟರು ಇರಲಾರರು.
5 ನಿನ್ನನ್ನು ನಂಬದವರು ನಿನ್ನ ಬಳಿಗೆ ಬರಲಾರರು; ದುಷ್ಟರನ್ನು ನೀನು ದ್ವೇಷಿಸುವೆ.
6 ಸುಳ್ಳಾಡುವವರನ್ನು ನೀನು ನಾಶಪಡಿಸುವೆ. ಕೊಲೆಗಾರರನ್ನೂ ಮೋಸಗಾರರನ್ನೂ ಯೆಹೋವನು ದ್ವೇಷಿಸುವನು.
7 ನಾನಂತೂ ನಿನ್ನ ಮಹಾಕೃಪೆಯನ್ನು ಹೊಂದಿದವನಾಗಿ ನಿನ್ನ ಆಲಯಕ್ಕೆ ಬರುವೆನು, ನಿನ್ನಲ್ಲಿ ಭಯಭಕ್ತಿಯುಳ್ಳವನಾಗಿ ನಿನ್ನ ಪವಿತ್ರ ಆಲಯದ ಕಡೆಗೆ ಅಡ್ಡಬೀಳುವೆನು.
8 ಯೆಹೋವನೇ, ವೈರಿಗಳು ನನ್ನನ್ನು ಗಮನಿಸುತ್ತಿರುವುದರಿಂದ ನಿನ್ನ ನೀತಿಯ ಮಾರ್ಗವನ್ನು ನನಗೆ ತೋರಿಸಿ, ನಿನ್ನ ಚಿತ್ತಾನುಸಾರವಾಗಿ ನನ್ನನ್ನು ನಡೆಸು.
9 ಅವರ ಮಾತುಗಳಲ್ಲಿ ಸತ್ಯವೆಂಬುದೇ ಇಲ್ಲ. ಅವರ ಬಾಯಿಗಳು ಸವಿಮಾತುಗಳನ್ನಾಡಿದರೂ ಅವರ ಹೃದಯಗಳು ನಾಶಕರವಾದ ಗುಂಡಿಯಾಗಿವೆ. ಅವರ ಗಂಟಲು ತೆರದ ಸಮಾಧಿಗಳಂತಿವೆ.
10 ದೇವರೇ, ಅವರನ್ನು ದಂಡಿಸು! ಅವರು ತಮ್ಮ ಬಲೆಗಳಿಗೇ ಸಿಕ್ಕಿಕೊಳ್ಳಲಿ. ಅವರು ನಿನಗೆ ವಿರೋಧವಾಗಿ ತಿರುಗಿದ್ದಾರೆ. ಅವರ ಅನೇಕ ಅಪರಾಧಗಳ ನಿಮಿತ್ತ ಅವರನ್ನು ದಂಡಿಸು.
11 ದೇವರಲ್ಲಿ ಭರವಸವಿಟ್ಟಿರುವ ಜನರೆಲ್ಲರೂ ಸದಾಕಾಲ ಸಂತೋಷವಾಗಿರಲಿ. ನಿನ್ನ ಹೆಸರನ್ನು ಪ್ರೀತಿಸುವ ಜನರನ್ನು ಕಾಪಾಡಿ ಅವರಿಗೆ ಶಕ್ತಿಯನ್ನು ದಯಪಾಲಿಸು.
12 ಯೆಹೋವನೇ, ನೀನು ನೀತಿವಂತರಿಗೆ ಒಳ್ಳೆಯದನ್ನೇ ಮಾಡುವೆ; ನೀನು ಅವರನ್ನು ವಿಶಾಲವಾದ ಗುರಾಣಿಯಂತೆ ಸಂರಕ್ಷಿಸುವೆ.

## ಕೀರ್ತನೆ 6

*ರಚನೆಗಾರ: ದಾವೀದ*

1 ಯೆಹೋವನೇ, ಕೋಪದಿಂದ ನನ್ನನ್ನು ಶಿಕ್ಷಿಸಬೇಡ; ರೋಷದಿಂದ ನನ್ನನ್ನು ದಂಡಿಸಬೇಡ.

2 ಯೆಹೋವನೇ, ನನ್ನನ್ನು ಕರುಣಿಸು! ನಾನು ರೋಗಿ
ಯಾಗಿದ್ದೀನೆ, ಬಲಹೀನನಾಗಿದ್ದೇನೆ, ನನ್ನನ್ನು ಗುಣ
ಪಡಿಸು! ನನ್ನ ಎಲುಬುಗಳು ನಡುಗುತ್ತಿವೆ.
3 ನನ್ನ ಇಡೀ ದೇಹ ನಡುಗುತ್ತಿದೆ. ಯೆಹೋವನೆ,
ನನ್ನನ್ನು ಗುಣಪಡಿಸಲು ಇನ್ನೆಷ್ಟುಕಾಲ ಬೇಕು?
4 ಯೆಹೋವನೇ, ನನ್ನನ್ನು ಮತ್ತೆ ಬಲಪಡಿಸು! ನಿನ್ನ
ಮಹಾ ಕೃಪೆಯಿಂದ ನನ್ನನ್ನು ರಕ್ಷಿಸು.
5 ಸತ್ತವರು ನಿನ್ನನ್ನು ಜ್ಞಾಪಿಸಿಕೊಳ್ಳುವರೇ? ಸಮಾಧಿ
ಗಳಲ್ಲಿರುವವರು ನಿನ್ನನ್ನು ಸ್ತುತಿಸುವರೇ? ಆದ್ದರಿಂದ
ನನ್ನನ್ನು ಗುಣಪಡಿಸು!
6 ಯೆಹೋವನೇ, ರಾತ್ರಿಯೆಲ್ಲಾ ನಿನಗೆ ಪ್ರಾರ್ಥಿಸಿ
ದೆನು. ನನ್ನ ಹಾಸಿಗೆಯು ನನ್ನ ಕಣ್ಣೀರಿನಿಂದ ಒದ್ದೆ
ಯಾಗಿದೆ. ನನ್ನ ಹಾಸಿಗೆಯಿಂದ ಕಣ್ಣೀರು ತೊಟ್ಟಿಕ್ಕು
ತ್ತಿದೆ. ನಾನು ಅತ್ತು ಗೋಳಾಡಿ ಬಲಹೀನನಾಗಿದ್ದೇನೆ.
7 ನನ್ನ ವೈರಿಗಳು ನನಗೆ ಅನೇಕ ತೊಂದರೆಗಳನ್ನು ಮಾಡಿ
ರುವುದರಿಂದ ನನಗೆ ದುಃಖವೂ ಗೋಳಾಟವೂ
ಉಂಟಾಗಿವೆ. ನನ್ನ ಕಣ್ಣುಗಳು ಬಲಹೀನಗೊಂಡಿವೆ;
ಅತ್ತತ್ತು ಆಯಾಸಗೊಂಡಿವೆ.
8 ದುಷ್ಟರೇ, ತೊಲಗಿಹೋಗಿರಿ. ಯಾಕೆಂದರೆ ಯೆಹೋ
ವನು ನನ್ನ ಗೋಳಾಟಕ್ಕೆ ಕಿವಿಗೊಟ್ಟಿದ್ದಾನೆ.
9 ಯೆಹೋವನು ನನ್ನ ಪ್ರಾರ್ಥನೆಯನ್ನು ಕೇಳಿದ್ದಾನೆ.
ಆತನು ನನ್ನ ಪ್ರಾರ್ಥನೆಯನ್ನು ಸ್ವೀಕರಿಸಿ ಸದುತ್ತರ
ವನ್ನು ದಯಪಾಲಿಸುವನು.
10 ನನ್ನ ವೈರಿಗಳೆಲ್ಲ ಗಲಿಬಿಲಿಗೊಂಡು ನಿರಾಶ
ರಾಗುವರು. ಇದ್ದಕ್ಕಿದ್ದಂತೆ ಅವಮಾನಿತರಾಗಿ
ಹಿಂತಿರುಗುವರು.

## ಕೀರ್ತನೆ 7

*ಬೆನ್ಯಾಮೀನ್ ಕುಲದವನಾದ ಕೂಷನ ಮಾತುಗಳ ವಿಷಯದಲ್ಲಿ*
*ರಚಿಸಲ್ಪಟ್ಟಿದೆ. ರಚನೆಗಾರ: ದಾವೀದ*

1 ನನ್ನ ದೇವರಾದ ಯೆಹೋವನೇ, ನಿನ್ನನ್ನೇ ಆಶ್ರಯಿಸಿ
ಕೊಂಡಿರುವೆ. ನನ್ನನ್ನು ಹಿಂದಟ್ಟುತ್ತಿರುವವರಿಂದ
ನನ್ನನ್ನು ತಪ್ಪಿಸಿ ಕಾಪಾಡು!
2 ನೀನು ನನಗೆ ಸಹಾಯ ಮಾಡದಿದ್ದರೆ, ಸಿಂಹದ
ಬಾಯಿಗೆ ಸಿಕ್ಕಿಕೊಂಡಿರುವ ಪ್ರಾಣಿಯಂತಾಗುವೆನು;
ರಕ್ಷಣೆಯೇ ಇಲ್ಲದವನಾಗಿ ಸೀಳಿಹಾಕಲ್ಪಡುವೆನು.
3 ನನ್ನ ದೇವರಾದ ಯೆಹೋವನೇ, ನಾನು ಯಾವ ಅಪ
ರಾಧವನ್ನಾದರೂ ಮಾಡಿದ್ದರೆ,
4 ಸ್ನೇಹಿತನೊಬ್ಬನಿಗೆ ಕೆಟ್ಟದ್ದೇನಾದರೂ ಮಾಡಿದ್ದರೆ,
ಶತ್ರುವಿನಿಂದ ಅನ್ಯಾಯವಾಗಿ ಏನನ್ನಾದರೂ ದೋಚಿ
ಕೊಂಡಿದ್ದರೆ,
5 ಇವುಗಳಲ್ಲಿ ನಾನು ಯಾವುದನ್ನೇ ಮಾಡಿದ್ದರೂ,
ಶತ್ರುವು ನನ್ನನ್ನು ಹಿಂದಟ್ಟಿ ಬಂದು ನನ್ನನ್ನು ಹಿಡಿದು
ನೆಲಕ್ಕೆ ಕೆಡವಿ ತುಳಿಯಲಿ; ನನ್ನ ಪ್ರಾಣವನ್ನು ಮಣ್ಣು
ಪಾಲು ಮಾಡಲಿ.
6 ಯೆಹೋವನೇ, ಎದ್ದೇಳು, ನಿನ್ನ ಕೋಪವನ್ನು
ತೋರು! ನನ್ನ ವೈರಿಯು ಕೋಪಗೊಂಡಿದ್ದಾನೆ. ಅವ
ನಿಗೆ ವಿರೋಧವಾಗಿ ಎದ್ದು ನಿಂತು ಹೋರಾಡು. ನನ್ನ
ದೇವರೇ, ಎದ್ದೇಳು, ನ್ಯಾಯಕ್ಕಾಗಿ ಒತ್ತಾಯಿಸು!
7 ಜನಾಂಗಗಳನ್ನು ನಿನ್ನ ಸುತ್ತಲೂ ಸೇರಿಸಿ ನಿನ್ನ ಉನ್ನತ
ಸ್ಥಾನದಲ್ಲಿ ಆಸೀನನಾಗು.
8 ಜನರಿಗೆ ನ್ಯಾಯತೀರಿಸು. ಯೆಹೋವನೇ, ನನಗೆ
ನ್ಯಾಯತೀರಿಸು. ನನ್ನನ್ನು ನೀತಿವಂತನೆಂದೂ ನಿರಪ
ರಾಧಿಯೆಂದೂ ನಿರೂಪಿಸು.
9 ಕೆಟ್ಟವರನ್ನು ದಂಡಿಸು, ಒಳ್ಳೆಯವರಿಗೆ ಸಹಾಯ
ಮಾಡು. ದೇವರೇ ನೀನು ಒಳ್ಳೆಯವನು; ಮನುಷ್ಯರ
ಅಂತರಾಳವನ್ನು ನೀನು ಪರಿಶೋಧಿಸಬಲ್ಲೆ.
10 ನನ್ನ ಗುರಾಣಿಯು ದೇವರೇ. ಆತನು ಯಥಾರ್ಥ
ವಂತರನ್ನು ರಕ್ಷಿಸುವನು.
11 ದೇವರು ನೀತಿವಂತನಾದ ನ್ಯಾಯಾಧೀಶನಾಗಿದ್ದಾನೆ.
ಆತನು ದುಷ್ಟರ ವಿಷಯದಲ್ಲಿ ಯಾವಾಗಲೂ ಕೋಪ
ವುಳ್ಳವನು.
12 ಆತನು ತಾನು ಮಾಡಿದ ತೀರ್ಮಾನವನ್ನು ಬದ
ಲಾಯಿಸುವುದಿಲ್ಲ.
13 ದುಷ್ಟರನ್ನು ಶಿಕ್ಷಿಸಲು ಆತನು ಸಿದ್ಧನಾಗಿದ್ದಾನೆ.*
14 ಕೆಲವರು ದುಷ್ಟಕಾರ್ಯಗಳನ್ನು ಮಾಡುವುದಕ್ಕಾ
ಗಿಯೇ ಆಲೋಚಿಸುತ್ತಿರುವರು. ಅವರು ಸಂಚು
ಗಳನ್ನು ಮಾಡುತ್ತಾ ಸುಳ್ಳಾಡುವರು.
15 ಅವರು ಇತರರನ್ನು ಬಲೆಗೆ ಸಿಕ್ಕಿಸಿ ಕೇಡು ಮಾಡ
ಬೇಕೆಂದಿದ್ದಾರೆ; ಆದರೆ ತಾವೇ ಆ ಬಲೆಗಳಿಗೆ ಸಿಕ್ಕಿ
ಕೊಳ್ಳುವರು.
16 ಅವರು ತಮ್ಮ ಕುಯುಕ್ತಿಗೆ ತಕ್ಕ ದಂಡನೆಯನ್ನು
ಹೊಂದುವರು. ಅವರು ಇತರರ ವಿಷಯದಲ್ಲಿ ಕ್ರೂರ
ವಾಗಿ ನಡೆದುಕೊಂಡರು. ಅವರು ಮಾಡಿದ
ಹಿಂಸೆಯು ಅವರಿಗೇ ಸಂಭವಿಸುವುದು.
17 ಯೆಹೋವನ ನ್ಯಾಯವಾದ ತೀರ್ಪಿಗಾಗಿ ಆತನನ್ನು
ಕೊಂಡಾಡುವೆನು. ಮಹೋನ್ನತನಾದ ಯೆಹೋವನ
ಹೆಸರನ್ನು ಸ್ತುತಿಸುವೆನು.

## ಕೀರ್ತನೆ 8

*ರಚನೆಗಾರ: ದಾವೀದ*

1 ನಮ್ಮ ಒಡೆಯನಾದ ಯೆಹೋವನೇ, ನಿನ್ನ ಹೆಸರು
ಭೂಲೋಕದಲ್ಲೆಲ್ಲಾ ಅತಿಶಯವಾದದ್ದು. ನಿನ್ನ

---

**ಆತನು...ಸಿದ್ಧನಾಗಿದ್ದಾನೆ** ಅಕ್ಷರಶಃ, ''ಆತನು ಹಿಂತಿರುಗಿಕೊಳ್ಳುವು ದಿಲ್ಲ. ಆತನು ತನ್ನ ಖಡ್ಗವನ್ನು ಹರಿತಗೊಳಿಸುವನು. ಆತನು ತನ್ನ ಬಿಲ್ಲನ್ನು ಹೂಡಿ ಗುರಿಯಿಟ್ಟಿದ್ದಾನೆ. ಆತನು ಮರಣಕರವಾದ ಆಯುಧವನ್ನು ಸಿದ್ಧಗೊಳಿಸಿದ್ದಾನೆ. ಆತನು ತನ್ನ ಅಗ್ನಿಬಾಣಗಳನ್ನು ಮಾಡಿದ್ದಾನೆ.

ಹೆಸರು ಪರಲೋಕದಲ್ಲೆಲ್ಲಾ ನಿನ್ನನ್ನು ಮಹಿಮೆ
ಪಡಿಸುವುದು.
2 ಚಿಕ್ಕ ಮಕ್ಕಳ ಬಾಯಿಗಳೂ ಕೂಸುಗಳ ಬಾಯಿಗಳೂ
ನಿನ್ನನ್ನು ಸ್ತುತಿಸಿ ಕೊಂಡಾಡುತ್ತವೆ; ನಿನ್ನ ವೈರಿಗಳ
ಬಾಯಿ ಮುಚ್ಚಿಸುವುದಕ್ಕಾಗಿಯೇ ನೀನು ಹೀಗೆ
ಮಾಡಿರುವೆ.
3 ನಿನ್ನ ಕೈಕೆಲಸವಾಗಿರುವ ಆಕಾಶ ಮಂಡಲವನ್ನೂ
ನೀನು ಸೃಷ್ಟಿಸಿದ ಚಂದ್ರನಕ್ಷತ್ರಗಳನ್ನೂ ನೋಡಿ
ಆಶ್ಚರ್ಯಗೊಳ್ಳುವೆನು.
4 ಮನುಷ್ಯರಿಗೆ ನೀನೇಕೆ ಪ್ರಾಮುಖ್ಯತೆ ಕೊಡಬೇಕು?
ನೀನೇಕೆ ಅವರನ್ನು ಜ್ಞಾಪಿಸಿಕೊಳ್ಳಬೇಕು? ಮನುಷ್ಯ
ರಿಗೆ ನೀನೇಕೆ ಪ್ರಾಮುಖ್ಯತೆ ಕೊಡಬೇಕು? ನೀನೇಕೆ
ಅವರನ್ನು ಗಣನೆಗೆ ತೆಗೆದುಕೊಳ್ಳಬೇಕು?
5 ಆದರೆ ನೀನು ಮನುಷ್ಯರಿಗೆ ಪ್ರಾಮುಖ್ಯತೆ ಕೊಟ್ಟಿ
ರುವೆ. ನೀನು ಅವರನ್ನು ದೇವದೂತರಿಗಿಂತ ಸ್ವಲ್ಪವೇ
ಕಡಿಮೆಯಾಗಿ ಸೃಷ್ಟಿಸಿದೆ. ನೀನು ಅವರಿಗೆ ಪ್ರಭಾವ
ವನ್ನೂ ಮಾನವನ್ನೂ ಕೀರಿಟವಾಗಿಟ್ಟಿರುವೆ.
6 ನೀನು ಸೃಷ್ಟಿಸಿದ ಪ್ರತಿಯೊಂದರ ಮೇಲೂ ಅವರನ್ನು
ಅಧಿಪತಿಯನ್ನಾಗಿ ಮಾಡಿರುವೆ. ನೀನು ಪ್ರತಿ
ಯೊಂದನ್ನೂ ಅವರಿಗೆ ಅಧೀನಗೊಳಿಸಿರುವೆ.
7 ಅವರು ಎಲ್ಲಾ ಪಶುಗಳ ಮೇಲೆಯೂ ಕಾಡುಪ್ರಾಣಿ
ಗಳ ಮೇಲೆಯೂ ದೊರೆತನ ಮಾಡುವರು.
8 ಆಕಾಶದ ಪಕ್ಷಿಗಳ ಮೇಲೆಯೂ ಸಾಗರದ ಮೀನುಗಳ
ಮೇಲೆಯೂ ದೊರೆತನ ಮಾಡುವರು.
9 ನಮ್ಮ ದೇವರಾದ ಯೆಹೋವನೇ, ನಿನ್ನ ಹೆಸರು
ಭೂಲೋಕದಲ್ಲೆಲ್ಲಾ ಎಷ್ಟೋ ಅತಿಶಯವಾಗಿದೆ.

## ಕೀರ್ತನೆ9

*ರಚನೆಗಾರ: ದಾವೀದ*

1 ಯೆಹೋವನೇ, ಪೂರ್ಣಹೃದಯದಿಂದ ನಿನ್ನನ್ನು
ಕೊಂಡಾಡುವೆನು. ನಿನ್ನ ಅದ್ಭುತಕಾರ್ಯಗಳನ್ನೆಲ್ಲಾ
ವರ್ಣಿಸುವೆನು.
2 ನಿನ್ನಲ್ಲಿ ಸಂತೋಷಿಸುತ್ತಾ ಉಲ್ಲಾಸಪಡುವೆನು.
ಮಹೋನ್ನತನೇ, ದೇವರೇ, ನಿನ್ನ ಹೆಸರನ್ನೇ
ಸಂಕೀರ್ತಿಸುವೆನು.
3 ನನ್ನ ವೈರಿಗಳು ನಿನ್ನ ಎದುರಿನಿಂದ ಹಿಂತಿರುಗಿ ಓಡಿ
ಹೋದರು. ಆದರೆ ಅವರು ಬಿದ್ದು ನಾಶವಾದರು.
4 ನೀನು ನೀತಿವಂತನಾದ ನ್ಯಾಯಾಧಿಪತಿ. ಸಿಂಹಾಸನದ
ಮೇಲೆ ಕುಳಿತು ನೀನು ನ್ಯಾಯತೀರಿಸುವೆ. ನೀನು ನನ್ನ
ಮೊಕದ್ದಮೆಯನ್ನು ಕೇಳಿ ನನ್ನ ವಿಷಯದಲ್ಲಿ ತೀರ್ಪು
ಮಾಡಿರುವೆ.
5 ನೀನು ಜನಾಂಗಗಳನ್ನು ಟೀಕಿಸಿ ಆ ದುಷ್ಟರನ್ನು ನಾಶ
ಮಾಡಿದೆ. ನೀನು ಅವರ ಹೆಸರುಗಳನ್ನು ಜೀವಿತರ
ಪಟ್ಟಿಯಿಂದ ಶಾಶ್ವತವಾಗಿ ಅಳಿಸಿಹಾಕಿರುವೆ.
6 ವೈರಿಯು ಇಲ್ಲವಾದನು. ನೀನು ಅವರ ನಗರಗಳನ್ನು
ನಾಶ ಮಾಡಿದೆ! ಈಗ ಹಾಳಾದ ಕಟ್ಟಡಗಳು ಮಾತ್ರ
ಉಳಿದಿವೆ. ದುಷ್ಟರನ್ನು ಜ್ಞಾಪಕಕ್ಕೆ ತರುವ ಯಾವುದೂ
ಉಳಿದಿಲ್ಲ.
7 ಯೆಹೋವನಾದರೋ ಶಾಶ್ವತವಾಗಿ ಆಳುವನು.
ಆತನು ಭೂಲೋಕಕ್ಕೆ ನ್ಯಾಯದೊರಕಿಸುವುದಕ್ಕಾಗಿ
ತನ್ನ ರಾಜ್ಯವನ್ನು ಬಲಗೊಳಿಸಿದ್ದಾನೆ. ಆತನು ಭೂನಿ
ವಾಸಿಗಳಿಗೆಲ್ಲಾ ನ್ಯಾಯವಾಗಿ ತೀರ್ಪು ಮಾಡುವನು.
ಆತನು ಜನಾಂಗಗಳಿಗೆಲ್ಲಾ ಯಥಾರ್ಥವಾಗಿ ತೀರ್ಪು
ಮಾಡುವನು.
9 ಯೆಹೋವನು ಕುಗ್ಗಿಹೋದವರಿಗೆ ಆಶ್ರಯಸ್ಥಾನವೂ
ಇಕ್ಕಟ್ಟಿನಲ್ಲಿರುವವರಿಗೆ ಆಶ್ರಯದುರ್ಗವೂ
ಆಗಿದ್ದಾನೆ.
10 ಯೆಹೋವನೇ, ನಿನ್ನ ಹೆಸರನ್ನು ಬಲ್ಲವರು ನಿನ್ನಲ್ಲಿ
ಭರವಸೆಯಿಡುವರು. ಯಾಕೆಂದರೆ ನಿನ್ನ ಸಹಾಯ
ಕ್ಕಾಗಿ ಬರುವವರನ್ನು ನೀನು ತೊರೆದುಬಿಡುವುದಿಲ್ಲ.
11 ಚೀಯೋನಿನ ನಿವಾಸಿಗಳೇ, ಯೆಹೋವನನ್ನು
ಸಂಕೀರ್ತಿಸಿರಿ. ಆತನ ಮಹತ್ಕಾರ್ಯಗಳನ್ನು ಜನಾಂಗ
ಗಳವರಿಗೆ ಪ್ರಕಟಿಸಿರಿ.
12 ಪ್ರಾಣಾಪರಾಧಕ್ಕೆ ಮುಯ್ಯಿತೀರಿಸುವ ಆತನು ಕುಗ್ಗಿ
ಹೋದವರ ಮೊರೆಯನ್ನು ಮರೆಯದೆ ಅವರನ್ನು
ಜ್ಞಾಪಿಸಿಕೊಂಡನು.
13 ''ಯೆಹೋವನೇ, ನನ್ನನ್ನು ಕರುಣಿಸು. ಇಗೋ,
ವೈರಿಗಳು ನನಗೆ ಕೇಡುಮಾಡುತ್ತಿದ್ದಾರೆ. 'ಮರಣ
ದ್ವಾರ' ದಿಂದ ತಪ್ಪಿಸಿ ಕಾಪಾಡು.''
14 ಆಗ ಜೆರುಸಲೇಮಿನ ದ್ವಾರಗಳ ಬಳಿಯಲ್ಲಿ ನಿನ್ನನ್ನು
ಸಂಕೀರ್ತಿಸುವೆನು. ನೀನು ನನ್ನನ್ನು ರಕ್ಷಿಸಿದ್ದರಿಂದ
ಹರ್ಷಿಸುವೆನು.
15 ಅನ್ಯಜನಾಂಗಗಳವರು ತಾವು ತೋಡಿದ ಕುಣಿಗಳಲ್ಲಿ
ತಾವೇ ಬಿದ್ದುಹೋಗುವರು; ತಾವು ಹಾಸಿದ ಬಲೆ
ಗಳಲ್ಲಿ ತಾವೇ ಸಿಕ್ಕಿಬೀಳುವರು.
16 ಯೆಹೋವನು ಅವರನ್ನು ಅವರ ಕುಯುಕ್ತಿ
ಯಲ್ಲಿಯೇ ಸಿಕ್ಕಿಸಿದ್ದರಿಂದ ಆತನ ನೀತಿಯು ಪ್ರಖ್ಯಾತ
ವಾಯಿತು.
17 ದೇವರನ್ನು ಮರೆಯುವ ಜನರೆಲ್ಲ ಕೆಟ್ಟವರು. ಅವರು
ಮರಣದ ಸ್ಥಳಕ್ಕೆ ಹೋಗುವರು.
18 ಕೆಲವೊಮ್ಮೆ, ಇಕ್ಕಟ್ಟಿನಲ್ಲಿರುವವರನ್ನು ದೇವರು
ಮರೆತಿರುವಂತೆ ಕಾಣುತ್ತದೆ; ಕುಗ್ಗಿಹೋದ ಅವರಿಗೆ
ನಿರೀಕ್ಷೆಯೇ ಇಲ್ಲದಂತೆ ಕಂಡರೂ ದೇವರು
ಅವರನ್ನು ಮರೆತುಬಿಡುವುದಿಲ್ಲ.
19 ಯೆಹೋವನೇ, ಎದ್ದೇಳು! ಜನಾಂಗಗಳಿಗೆ ನ್ಯಾಯ
ತೀರಿಸು. ಅವರು ಬಲಿಷ್ಠರಾಗಕೂಡದು.

20 ಯೆಹೋವನೇ, ಅವರಿಗೆ ಭಯಹುಟ್ಟಿಸು; ತಾವು ಕೇವಲ ಮನುಷ್ಯರೆಂಬುದನ್ನು ಅವರು ಗ್ರಹಿಸಿಕೊಳ್ಳಲಿ.

## ಕೀರ್ತನೆ 10

1 ಯೆಹೋವನೇ, ನೀನು ಬಹುದೂರವಾಗಿರುವುದೇಕೆ? ಕಷ್ಟಕಾಲದಲ್ಲಿ ನೀನು ಮರೆಯಾಗಿರುವುದೇಕೆ?

2 ದುಷ್ಟರು ಗರ್ವಿಷ್ಠರಾಗಿ ಬಡವರನ್ನು ಹಿಂದಟ್ಟಿ ಹೋಗುತ್ತಿದ್ದಾರೆ; ಆ ದುಷ್ಟರ ಕುಯುಕ್ತಿಯಲ್ಲಿ ಅವರು ಸಿಕ್ಕಿ ಬೀಳುವರು.

3 ಕೆಡುಕರು ತಮ್ಮ ಇಷ್ಟ ವಸ್ತುಗಳ ಬಗ್ಗೆ ಕೊಚ್ಚಿಕೊಳ್ಳುವರು. ದುರಾಶೆಯುಳ್ಳ ಅವರು ದೇವರನ್ನು ಶಪಿಸುತ್ತಾ ಆತನ ಮೇಲೆ ತಮಗಿರುವ ದ್ವೇಷವನ್ನು ತೋರ್ಪಡಿಸಿಕೊಳ್ಳುವರು.

4 ಆ ದುಷ್ಟರು ಗರ್ವದಿಂದ ದೇವರನ್ನು ತೊರೆದುಬಿಡುವರು; ದುಷ್ಟಾಲೋಚನೆಗಳನ್ನು ಮಾಡುತ್ತಾ ದೇವರಿಲ್ಲದಂತೆ ವರ್ತಿಸುವರು.

5 ಅವರು ಕುಯುಕ್ತಿಗಳನ್ನೇ ಮಾಡುತ್ತಾ ದೇವರ ಕಟ್ಟಳೆಗಳನ್ನೂ ಬುದ್ಧಿಮಾತುಗಳನ್ನೂ ಗಣನೆಗೆ ತೆಗೆದುಕೊಳ್ಳುವುದಿಲ್ಲ.* ದೇವರ ವೈರಿಗಳು ಆತನ ಉಪದೇಶಗಳನ್ನು ಕಡೆಗಣಿಸುವರು.

6 ಅವರು, ''ನಮ್ಮನ್ನು ಯಾವುದೂ ಕದಲಿಸದು; ನಮಗೆ ಕೇಡಾಗದಿರುವುದರಿಂದ ಸಂತೋಷವಾಗಿರೋಣ'' ಎಂದುಕೊಂಡಿದ್ದಾರೆ.

7 ಅವರು ಯಾವಾಗಲೂ ಶಪಿಸುತ್ತಾರೆ; ಕೆಟ್ಟ ಮಾತುಗಳನ್ನು ಆಡುತ್ತಾರೆ; ಕುಯುಕ್ತಿಗಳನ್ನು ಮಾಡುತ್ತಾರೆ.

8 ಅವರು ನಿರಪರಾಧಿಗಳನ್ನು ಹಿಡಿದು ಕೊಲ್ಲಲು ಗುಪ್ತವಾದ ಸ್ಥಳಗಳಲ್ಲಿ ಅಡಗಿಕೊಂಡಿರುವರು; ಅಸಹಾಯಕರಿಗಾಗಿ ಎದುರು ನೋಡುವರು.

9 ಅವರು ಬೇಟೆಯಾಡುವ ಸಿಂಹಗಳಂತಿದ್ದಾರೆ. ಅವರು ನಿಸ್ಸಹಾಯಕರ ಮೇಲೆ ಆಕ್ರಮಣ ಮಾಡಿ ತಮ್ಮ ಬಲೆಗಳಲ್ಲಿ ಎಳೆದುಕೊಂಡು ಹೋಗುವರು.

10 ಆ ದುಷ್ಟರು ಕುಗ್ಗಿಹೋದವರನ್ನು ಮತ್ತೆ ಮತ್ತೆ ಜಜ್ಜಿಹಾಕುವರು.

11 ಆದ್ದರಿಂದ ಆ ನಿಸ್ಸಹಾಯಕರು, ''ದೇವರು ನಮ್ಮನ್ನು ಮರೆತುಬಿಟ್ಟಿದ್ದಾನೆ! ನಮಗೆ ಶಾಶ್ವತವಾಗಿ ವಿಮುಖನಾಗಿದ್ದಾನೆ! ನಮಗೆ ಸಂಭವಿಸುತ್ತಿರುವುದನ್ನು ಆತನು ನೋಡುವುದಿಲ್ಲ! ಎಂದು ಯೋಚಿಸತೊಡಗುವರು.

12 ಯೆಹೋವನೇ, ಎದ್ದೇಳು, ಕಾರ್ಯನಿರತನಾಗು! ದೇವರೇ, ಆ ದುಷ್ಟರನ್ನು ದಂಡಿಸು! ನಿಸ್ಸಹಾಯಕರನ್ನು ಮರೆತುಬಿಡಬೇಡ!

13 ದುಷ್ಟರು ದೇವರಿಗೆ ವಿರೋಧವಾಗಿ ಎದ್ದಿರುವುದೇಕೆ? ಆತನು ತಮ್ಮನ್ನು ದಂಡಿಸುವುದಿಲ್ಲವೆಂದು ಅವರು ಆಲೋಚಿಸಿಕೊಂಡಿರುವುದೇಕೆ?

14 ಯೆಹೋವನೇ, ಆ ದುಷ್ಟರ ಕ್ರೂರವಾದ ಕಾರ್ಯಗಳನ್ನೂ ದುಷ್ಕೃತ್ಯಗಳನ್ನೂ ನೀನು ಖಂಡಿತವಾಗಿ ನೋಡುವೆ. ಅವುಗಳನ್ನು ನೋಡಿ ಕಾರ್ಯನಿರತನಾಗು. ಅನೇಕ ತೊಂದರೆಗಳಲ್ಲಿ ಸಿಕ್ಕಿಕೊಂಡಿರುವವರು ಸಹಾಯಕ್ಕಾಗಿ ನಿನ್ನ ಬಳಿಗೆ ಬರುವರು. ಅನಾಥರಿಗೆ ಸಹಾಯ ಮಾಡುವವನು ನೀನೇ. ಆದ್ದರಿಂದ ಅವರಿಗೆ ಸಹಾಯಮಾಡು!

15 ಕೆಡುಕರನ್ನು ನಾಶಮಾಡು. ನಿನ್ನ ದೇಶದಿಂದ ಅವರನ್ನು ನಿರ್ಮೂಲಮಾಡು!

16 ಅವರನ್ನು ನಿನ್ನ ದೇಶದಿಂದ ತೆಗೆದುಹಾಕು!

17 ಯೆಹೋವನೇ, ಕುಗ್ಗಿಹೋದವರ ಕೋರಿಕೆಯನ್ನು ನೀನು ಕೇಳುವೆ. ಅವರ ಮೊರೆಗೆ ಕಿವಿಗೊಟ್ಟು ಅವರನ್ನು ಪ್ರೋತ್ಸಾಹಿಸುವೆ.

18 ಯೆಹೋವನೇ, ಅನಾಥರನ್ನೂ ಕುಗ್ಗಿಸಲ್ಪಟ್ಟವರನ್ನೂ ಸಂರಕ್ಷಿಸು. ಆಗ ಕೇವಲ ಮನುಷ್ಯರಿಂದ ಅವರಿಗೆ ಭಯವಾಗದು.

## ಕೀರ್ತನೆ 11

*ರಚನೆಗಾರ: ದಾವೀದ*

1 ನಾನು ಯೆಹೋವನನ್ನೇ ಆಶ್ರಯಿಸಿಕೊಂಡಿದ್ದೇನೆ. ಹೀಗಿರಲು, ''ನಿನ್ನ ಬೆಟ್ಟಕ್ಕೆ ಪಕ್ಷಿಯಂತೆ ಹಾರಿಹೋಗು'' ಎಂದು ನೀವು ಹೇಳುವುದೇಕೆ?

2 ದುಷ್ಟರು ಬೇಟೆಗಾರರಂತಿದ್ದಾರೆ; ಅವರು ಕತ್ತಲೆಯಲ್ಲಿ ಅವಿತುಕೊಂಡಿರುವರು; ಬಿಲ್ಲುಗಳಿಗೆ ಬಾಣಗಳನ್ನು ಹೂಡಿ ನೀತಿವಂತರ ಹೃದಯಕ್ಕೆ ನೇರವಾಗಿ ಹೊಡೆಯುವರು.

3 ಅಸ್ತಿವಾರಗಳೇ ನಾಶವಾಗುತ್ತಿದ್ದರೆ ನೀತಿವಂತನು ಏನು ಮಾಡಲಾದೀತು?

4 ಯೆಹೋವನು ತನ್ನ ಪವಿತ್ರ ಆಲಯದಲ್ಲಿದ್ದಾನೆ. ಆತನು ಪರಲೋಕದಲ್ಲಿ ತನ್ನ ಸಿಂಹಾಸನದ ಮೇಲೆ ಕುಳಿತುಕೊಂಡು ಮನುಷ್ಯರ ಕಾರ್ಯಗಳನ್ನು ಗಮನಿಸುತ್ತಿದ್ದಾನೆ. ಆತನ ಕಣ್ಣುಗಳು ಅವರನ್ನು ಪರಿಶೋಧಿಸುತ್ತಿವೆ.

5 ಯೆಹೋವನು ನೀತಿವಂತರಿಗಾಗಿ ಹುಡುಕುವನು. ಆದರೆ ಆತನು ದುಷ್ಟರನ್ನೂ ಹಿಂಸಕರನ್ನೂ ತಿರಸ್ಕರಿಸುವನು.

6 ಆ ದುಷ್ಟರ ಮೇಲೆ ಬೆಂಕಿಗಂಧಕಗಳ ಮಳೆಯನ್ನು ಆತನು ಸುರಿಸುವನು. ಅವರಿಗೆ ಸಿಕ್ಕುವುದೆಂದರೆ ಕಾದ ಉರಿಗಾಳಿಯೊಂದೇ.

---

**ಅವರು … ತೆಗೆದುಕೊಳ್ಳುವುದಿಲ್ಲ** ಅಕ್ಷರಶಃ, ''ನಿನ್ನ ನ್ಯಾಯತೀರ್ಪು ಅವನಿಗಿಂತ ಬಹು ಉನ್ನತವಾಗಿದೆ.''

7 ಯೆಹೋವನು ನೀತಿಸ್ವರೂಪನಾಗಿದ್ದಾನೆ. ಆತನು
ನ್ಯಾಯವನ್ನು ಪ್ರೀತಿಸುತ್ತಾನೆ. ನೀತಿವಂತರು ಆತನ
ಮುಖವನ್ನು ನೋಡುವರು.

## ಕೀರ್ತನೆ 12

*ರಚನೆಗಾರ: ದಾವೀದ*

1 ಯೆಹೋವನೇ, ನನ್ನನ್ನು ರಕ್ಷಿಸು! ಒಳ್ಳೆಯವರೆಲ್ಲಾ
ಕೊನೆಗೊಂಡರು. ಭೂನಿವಾಸಿಗಳಲ್ಲಿ ನಿಜವಾದ
ವಿಶ್ವಾಸಿಗಳು ಉಳಿದೇ ಇಲ್ಲ.
2 ಜನರು ತಮ್ಮ ನೆರೆಯವರಿಗೆ ಸುಳ್ಳು ಹೇಳುವರು. ಪ್ರತಿ
ಯೊಬ್ಬರೂ ತಮ್ಮ ನೆರೆಯವರಿಗೆ ಸುಳ್ಳಿನಿಂದ ಮುಖ
ಸ್ತುತಿ ಮಾಡುವರು.
3 ಸುಳ್ಳಾಡುವ ಆ ತುಟಿಗಳನ್ನೂ ಕಟ್ಟುಕಥೆಗಳನ್ನು
ಹೇಳುವ ಆ ನಾಲಿಗೆಗಳನ್ನೂ ಯೆಹೋವನು ಕತ್ತರಿಸಿ
ಹಾಕಲಿ.
4 ‘‘ನಾವು ಪ್ರಮುಖರಾಗಲು ನಮ್ಮ ಸುಳ್ಳುಗಳೇ ನಮಗೆ
ಆಧಾರ. ನಮ್ಮ ನಾಲಿಗೆಗಳು ಇರುವಾಗ ನಮಗೆ
ಒಡೆಯರಾಗಲು ಯಾರಿಗೆ ಸಾಧ್ಯ?’’ ಎಂದು ಅವರು
ಹೇಳುತ್ತಾರೆ.
5 ಆದರೆ ಯೆಹೋವನು ಹೇಳುವುದೇನಂದರೆ:
‘‘ದುಷ್ಟರು ಕುಗ್ಗಿಹೋದವರಿಂದ ಕದ್ದುಕೊಂಡಿದ್ದಾರೆ.
ಅಸಹಾಯಕರು ದುಃಖದಿಂದ ನಿಟ್ಟುಸಿರು ಬಿಡುತ್ತಿ
ದ್ದಾರೆ. ಆದ್ದರಿಂದ ನಾನು ಎದ್ದು ನಿಂತು, ಆಯಾಸ
ಗೊಂಡಿರುವ ಅವರನ್ನು ಕಾಪಾಡುವೆನು.’’
6 ಯೆಹೋವನ ಮಾತುಗಳು ಬೆಂಕಿಯಲ್ಲಿ ಏಳು ಸಲ
ಶುದ್ಧೀಕರಿಸಿದ ಬೆಳ್ಳಿಯಂತೆ ಸತ್ಯವಾಗಿವೆ.
7 ಯೆಹೋವನೇ ಅಸಹಾಯಕರನ್ನು ಪರಿಪಾಲಿಸು.
ಅವರನ್ನು ಶಾಶ್ವತವಾಗಿ ಸಂರಕ್ಷಿಸು.
8 ಆ ದುಷ್ಟರು ಪ್ರಮುಖರಂತೆ ವರ್ತಿಸಿದರೂ ಅವರು
ಕೇವಲ ನಕಲಿ ಆಭರಣಗಳಂತಿದ್ದಾರೆ.

## ಕೀರ್ತನೆ 13

*ರಚನೆಗಾರ: ದಾವೀದ*

1 ಯೆಹೋವನೇ, ಇನ್ನೆಷ್ಟು ಕಾಲ ನನ್ನನ್ನು ಮರೆತಿ
ರುವೆ? ನನ್ನನ್ನು ಶಾಶ್ವತವಾಗಿ ಮರೆತುಬಿಡುವೆಯಾ?
ಇನ್ನೆಷ್ಟು ಕಾಲ ನನಗೆ ಮರೆಯಾಗಿರುವೆ?
2 ನಾನು ದುಃಖಕ್ರಾಂತನಾಗಿ ಇನ್ನೆಷ್ಟುಕಾಲ ಆಲೋಚಿ
ಸುತ್ತಿರಬೇಕು? ನನ್ನ ವೈರಿಗಳು ಇನ್ನೆಷ್ಟುಕಾಲ ನನ್ನ
ಮೇಲೆ ಜಯಗಳಿಸಬೇಕು?
3 ನನ್ನ ದೇವರಾದ ಯೆಹೋವನೇ, ನನ್ನ ಮೇಲೆ ದೃಷ್ಟಿ
ಯಿಟ್ಟು ಸದುತ್ತರವನ್ನು ದಯಪಾಲಿಸು. ಇಲ್ಲವಾದರೆ,
ನಾನು ಸಾಯಲೇಬೇಕಾಗುವುದು!
4 ಆಗ ವೈರಿಯು, ‘‘ನಾನು ಅವನನ್ನು ಸೋಲಿಸಿದೆ!’’
ಎಂದು ಹೇಳುತ್ತಾ ನನ್ನ ಬೀಳುವಿಕೆಯನ್ನು ಕಂಡು
ಸಂತೋಷ ಪಡುವನು.
5 ನಾನಂತೂ ನಿನ್ನ ಶಾಶ್ವತವಾದ ಪ್ರೀತಿಯಲ್ಲಿ ಭರವಸೆ
ವಿಟ್ಟಿದ್ದೇನೆ. ನಿನ್ನ ರಕ್ಷಣೆಯ ನಿಮಿತ್ತ ನನ್ನ ಹೃದಯವು
ಹರ್ಷಿಸುವುದು.
6 ಯೆಹೋವನು ಮಹೋಪಕಾರಗಳನ್ನು ಮಾಡಿರುವು
ದರಿಂದ ಆತನಿಗೆ ಹರ್ಷಗೀತೆಗಳನ್ನು ಹಾಡುವೆನು.

## ಕೀರ್ತನೆ 14

*ರಚನೆಗಾರ: ದಾವೀದ*

1 ಮೂಢರು ತಮ್ಮ ಹೃದಯದಲ್ಲಿ, ‘‘ದೇವರಿಲ್ಲ’’
ಎಂದುಕೊಳ್ಳುವರು. ಮೂಢರು ಭಯಂಕರವಾದ
ಅಸಹ್ಯ ಕೃತ್ಯಗಳನ್ನು ಮಾಡುವರು. ಅವರಲ್ಲಿ ಒಳ್ಳೆಯ
ದನ್ನು ಮಾಡುವವರು ಇಲ್ಲವೇ ಇಲ್ಲ.
2 ದೇವರಿಗಾಗಿ ಹುಡುಕುವ ಬುದ್ಧಿವಂತರು ಮನುಷ್ಯ
ರಲ್ಲಿ ಇದ್ದಾರೋ ಎಂದು ಯೆಹೋವನು ಪರಲೋಕ
ದಿಂದ ಮನುಷ್ಯರನ್ನು ನೋಡುವನು.
3 ಆದರೆ ಪ್ರತಿಯೊಬ್ಬನೂ ದೇವರಿಗೆ ವಿಮುಖನಾಗಿ
ದ್ದಾನೆ. ಎಲ್ಲರೂ ಕೆಟ್ಟುಹೋಗಿದ್ದಾರೆ. ಒಳ್ಳೆಯದನ್ನು
ಮಾಡುವವನು ಇಲ್ಲ; ಒಬ್ಬನಾದರೂ ಇಲ್ಲ.
4 ಅವರು ಅರ್ಥಮಾಡಿಕೊಳ್ಳುವುದಿಲ್ಲವೇ? ಅವರು
ನನ್ನ ಜನರನ್ನು ಆಹಾರವನ್ನೋ ಎಂಬಂತೆ ನುಂಗಿ
ಬಿಡುತ್ತಾರೆ. ಅವರು ಯೆಹೋವನನ್ನು
ಆರಾಧಿಸುವುದೂ ಇಲ್ಲ.

5-6 ಬಡವರ ಬುದ್ಧಿಮಾತನ್ನು ಆ ದುಷ್ಟರು ಕೇಳುವುದಿಲ್ಲ.
ಯಾಕೆಂದರೆ ಬಡವರು ಆಶ್ರಯಿಸಿಕೊಂಡಿರುವುದು
ಯೆಹೋವನನ್ನೇ. ಆದರೆ ದೇವರು ನೀತಿವಂತ
ರೊಂದಿಗಿದ್ದಾನೆ. ಆದ್ದರಿಂದ ದುಷ್ಟರು ಭಯಭ್ರಾಂತ
ರಾಗುವರು.
7 ಚೀಯೋನ್* ಪರ್ವತದ ಮೇಲಿರುವಾತನು
ಇಸ್ರೇಲನ್ನು ರಕ್ಷಿಸುವನೇ? ಯೆಹೋವನ ಪ್ರಜೆಗಳು
ಸೆರೆ ಒಯ್ಯಲ್ಪಟ್ಟು ಸೆರೆವಾಸದಲ್ಲಿದ್ದಾರೆ. ಯೆಹೋವ
ನಾದರೊ ತನ್ನ ಪ್ರಜೆಗಳನ್ನು ಬಿಡಿಸಿಕೊಂಡು ಬರು
ವನು; ಆಗ ಯಾಕೋಬರು ಉಲ್ಲಾಸಗೊಳ್ಳುವರು;
ಇಸ್ರೇಲರು ಹರ್ಷಿಸುವರು.

---

**ಚೀಯೋನ್** ಯಾವ ಬೆಟ್ಟದ ಮೇಲೆ ಜೆರುಸಲೇಮ್ ಕಟ್ಟಲ್ಪಟ್ಟಿದೆಯೊ ಆ ಬೆಟ್ಟದ ಆಗ್ನೇಯ ಭಾಗ. ಕೆಲವು ಸಲ ಇದು, ಜೆರುಸಲೇಮಿನಲ್ಲಿ ವಾಸಿಸುತ್ತಿರುವ ದೇವರ ಜನರು ಎಂಬ ಅರ್ಥವನ್ನು ಕೊಡುತ್ತದೆ.

## ಕೀರ್ತನೆ 15

*ರಚನೆಗಾರ: ದಾವೀದ*

1 ಯೆಹೋವನೇ, ನಿನ್ನ ಪವಿತ್ರ ಗುಡಾರದಲ್ಲಿ* ಎಂಥ
ವನು ವಾಸಿಸಬಲ್ಲನು? ನಿನ್ನ ಪವಿತ್ರ ಪರ್ವತದ*
ಮೇಲೆ ಎಂಥವನು ನೆಲಸಬಲ್ಲನು?
2 ಅವನು ನಿರ್ದೋಷಿಯೂ ಒಳ್ಳೆಯ ಕಾರ್ಯಗಳನ್ನು
ಮಾಡುವವನೂ ಹೃದಯದಿಂದ ಸತ್ಯವನ್ನು ಮಾತಾಡು
ವವನೂ ಆಗಿರಬೇಕು.
3 ಅವನು ಚಾಡಿ ಹೇಳದವನೂ ನೆರೆಯವರಿಗೆ ಕೇಡನ್ನು
ಮಾಡದವನೂ ತನ್ನ ಸ್ವಂತ ಕುಟುಂಬದವರನ್ನು
ನಿಂದಿಸದವನೂ ಆಗಿರಬೇಕು.
4 ಅವನು ದೇವದೂಷಕರನ್ನು ತಿರಸ್ಕರಿಸುವವನೂ
ಯೆಹೋವನಲ್ಲಿ ಭಯಭಕ್ತಿಯುಳ್ಳವರನ್ನು ಗೌರವಿ
ಸುವವನೂ ತನಗೆ ತೊಂದರೆಯಾದರೂ ಕೊಟ್ಟ
ಮಾತಿಗೆ ತಪ್ಪದವನೂ ಆಗಿರಬೇಕು.
5 ಅವನು ಕೊಟ್ಟ ಸಾಲಕ್ಕೆ ಬಡ್ಡಿಕೇಳದವನೂ ನಿರಪ
ರಾಧಿಗೆ ಕೇಡುಮಾಡಲು ಲಂಚ ತೆಗೆದು
ಕೊಳ್ಳದವನೂ ಆಗಿರಬೇಕು. ಹೀಗೆ ಜೀವಿಸುವವನು
ದೇವರಿಗೆ ಸಮೀಪವಾಗಿಯೇ ಇರುತ್ತಾನೆ.*

## ಕೀರ್ತನೆ 16

*ರಚನೆಗಾರ: ದಾವೀದ*

1 ದೇವರೇ, ನನ್ನನ್ನು ಕಾಪಾಡು. ಯಾಕಂದರೆ ನಾನು
ನಿನ್ನನ್ನೇ ಆಶ್ರಯಿಸಿಕೊಂಡಿರುವೆ.
2 ನಾನು ಯೆಹೋವನಿಗೆ, “ನೀನೇ ನನ್ನ ಒಡೆಯನು.
ನನ್ನಲ್ಲಿರುವ ಒಳ್ಳೆಯದನ್ನೆಲ್ಲ ದಯಪಾಲಿಸಿದಾತನು
ನೀನೇ” ಎಂದು ಹೇಳಿದೆನು.
3 ಯೆಹೋವನು ಭೂಲೋಕದಲ್ಲಿರುವ ತನ್ನ ಭಕ್ತರಿಗೆ
ಅತಿಶಯವಾದವುಗಳನ್ನು ಮಾಡುವನು; ಅವರ
ಮೇಲೆ ತನಗಿರುವ ನಿಜವಾದ ಪ್ರೀತಿಯನ್ನು
ತೋರ್ಪಡಿಸುವನು.
4 ಆದರೆ ಅನ್ಯದೇವರುಗಳನ್ನು ಆಶ್ರಯಿಸಿಕೊಂಡವರಿಗೆ
ಕೇಡುಗಳು ಹೆಚ್ಚಾಗುತ್ತವೆ. ಅವರು ಆ ವಿಗ್ರಹಗಳಿಗೆ
ಅರ್ಪಿಸುವ ರಕ್ತದ ಕಾಣಿಕೆಗಳಲ್ಲಿ ನಾನು ಪಾಲುಗಾರ
ನಾಗುವುದಿಲ್ಲ, ಆ ವಿಗ್ರಹಗಳ ಹೆಸರುಗಳನ್ನೂ ನಾನು
ಉಚ್ಚರಿಸುವುದಿಲ್ಲ.
5 ನನ್ನ ಪಾಲೂ ನನ್ನ ಪಾತ್ರೆಯೂ ಯೆಹೋವನಿಂದಲೇ
ಬರುತ್ತವೆ. ಯೆಹೋವನೇ, ನನಗೆ ಆದಾರವಾಗಿದ್ದು
ನನ್ನ ಪಾಲನ್ನು ದಯಪಾಲಿಸುವಾತನು ನೀನೇ.
6 ನನ್ನ ಪಾಲು* ರಮಣೀಯವಾಗಿದೆ. ನನ್ನ ಸ್ವಾಸ್ತ್ಯವು*
ಬಹು ಸುಂದರವಾಗಿದೆ.
7 ನನ್ನ ಆಲೋಚನಾಕರ್ತನಾದ ಯೆಹೋವನನ್ನು
ಕೊಂಡಾಡುವೆನು; ರಾತ್ರಿಯಲ್ಲಿಯೂ, ಆತನು ತನ್ನ
ಆಲೋಚನೆಗಳನ್ನು ನನ್ನ ಅಂತರಾತ್ಮದಲ್ಲಿ
ಬೇರೂರಿಸುವನು.
8 ನಾನು ಯೆಹೋವನನ್ನು ಯಾವಾಗಲೂ ನನ್ನ ಎದುರಿ
ನಲ್ಲೇ ಇಟ್ಟುಕೊಂಡಿದ್ದೇನೆ; ಆತನು ನನ್ನ ಬಲಗಡೆ
ಯಲ್ಲಿರುವುದರಿಂದ ನಾನೆಂದಿಗೂ ಕದಲುವುದಿಲ್ಲ.
9 ಆದ್ದರಿಂದ ನನ್ನ ಹೃದಯವೂ ಆತ್ಮವೂ ಉಲ್ಲಾಸ
ಪಡುತ್ತವೆ. ನನ್ನ ದೇಹವೂ ಸುರಕ್ಷಿತವಾಗಿರುವುದು.
10 ಯಾಕಂದರೆ, ನೀನು ನನ್ನ ಆತ್ಮವನ್ನು ಪಾತಾಳದಲ್ಲಿ
ಬಿಡುವುದಿಲ್ಲ ನಿನ್ನ ಪವಿತ್ರನನ್ನು ಸಮಾಧಿಯಲ್ಲಿ ಕೊಳೆ
ಯಲು ಬಿಡುವುದಿಲ್ಲ.
11 ನೀನು ನನಗೆ ಜೀವಮಾರ್ಗವನ್ನು ಉಪದೇಶಿಸುವೆ.
ನಿನ್ನ ಸನ್ನಿಧಿಯಲ್ಲಿದ್ದರೆ ಪರಿಪೂರ್ಣ ಸಂತೋಷ
ವಿರುವುದು; ನಿನ್ನ ಬಲಗಡೆಯಲ್ಲಿದ್ದರೆ ಶಾಶ್ವತವಾದ
ಆನಂದವಿರುವುದು.

## ಕೀರ್ತನೆ 17

*ಪ್ರಾರ್ಥನೆ, ರಚನೆಗಾರ: ದಾವೀದ*

1 ಯೆಹೋವನೇ, ನ್ಯಾಯವಾದ ನನ್ನ ಪ್ರಾರ್ಥನೆಗೆ ಕಿವಿ
ಗೊಡು. ನನ್ನ ಮೊರೆಯನ್ನು ಆಲೈಸು. ನನ್ನ ಯಥಾರ್ಥ
ವಾದ ಪ್ರಾರ್ಥನೆಗೆ ಕಿವಿಗೊಡು.
2 ನನ್ನ ಕುರಿತಾಗಿ ನ್ಯಾಯವಾದ ತೀರ್ಪು ನಿನ್ನಿಂದಲೇ
ಬರಲಿ. ನೀನು ಸತ್ಯವನ್ನು ನೋಡಬಲ್ಲಾತನಾಗಿರುವೆ.
3 ನೀನು ನನ್ನ ಅಂತರಾಳವನ್ನು ರಾತ್ರಿಯೆಲ್ಲಾ ಪರೀಕ್ಷಿಸಿ
ರುವೆ. ನೀನು ನನ್ನನ್ನು ಪ್ರಶ್ನಿಸಿದಾಗ ನನ್ನಲ್ಲಿ ಯಾವ
ದೋಷವೂ ಕಂಡುಬರಲಿಲ್ಲ. ನಾನು ಯಾವ ತಪ್ಪನ್ನೂ
ಮಾಡಿರಲಿಲ್ಲ.
4 ನಿನ್ನ ಆಜ್ಞೆಗಳಿಗೆ ವಿಧೇಯನಾಗಲು ನನ್ನಿಂದಾದಷ್ಟು
ಪ್ರಯತ್ನಿಸಿದ್ದೇನೆ.
5 ನಿನ್ನ ಜೀವಮಾರ್ಗದಲ್ಲೇ ಹೆಜ್ಜೆಯಿಡುತ್ತಾ ನಡೆಯು
ತ್ತಿದ್ದೇನೆ. ನನ್ನ ಪಾದವು ತಪ್ಪು ದಾರಿಗೆ ಹೋಗಲಿಲ್ಲ.
6 ದೇವರೇ, ನಾನು ನಿನ್ನನ್ನು ಕರೆದಾಗಲ್ಲೆಲ್ಲಾ, ನೀನು
ನನಗೆ ಉತ್ತರಿಸಿದೆ. ಆದ್ದರಿಂದ ಈಗಲೂ ನನಗೆ ಕಿವಿ
ಗೊಡು.

---

**ಪವಿತ್ರ ಗುಡಾರ** ಇಸ್ರೇಲ್ ಜನರು ದೇವರನ್ನು ಆರಾಧಿಸುತ್ತಿದ್ದ ವಿಶೇಷ ವಾದ ಸ್ಥಳ. ಇಲ್ಲಿ ಇದು ಬಹುಶಃ ಜೆರುಸಲೇಮಿನ ದೇವಾಲಯ ಎಂದು ಅರ್ಥಕೊಡುತ್ತದೆ.

**ಪವಿತ್ರ ಪರ್ವತ** ಚಿಯೋನ್, ಯಾವ ಪರ್ವತಗಳ ಮೇಲೆ ಜೆರುಸಲೇಮ್ ಕಟ್ಟಲ್ಪಟ್ಟಿದೆಯೋ ಆ ಪರ್ವತಗಳಲ್ಲಿ ಇದೂ ಒಂದು.

**ಹೀಗೆ … ಸಮೀಪವಾಗಿಯೇ ಇರುತ್ತಾನೆ.** ಅಕ್ಷರಶಃ, “ಅವನು ಎಂದಿಗೂ ಕದಲುವುದಿಲ್ಲ.”

**ಪಾಲು** ಅಥವಾ “ಭೂಮಿಯ ಭಾಗ.”

**ಸ್ವಾಸ್ತ್ಯ** ಇದರ ಅರ್ಥ: ಪ್ರತಿಯೊಂದು ಯೆಹೂದ್ಯ ಕುಟುಂಬವು ದೇವರಿಂದ ಸ್ವೀಕರಿಸಿದ ಭೂಮಿ.

7 ದೇವರೇ, ನಿನ್ನಲ್ಲಿ ಭರವಸೆಯಿಟ್ಟಿರುವ ಭಕ್ತರಿಗೆ ನೀನು ಸಹಾಯ ಮಾಡುವೆ; ಅವರು ನಿನ್ನ ಬಲಗಡೆಯಲ್ಲಿ ಸುರಕ್ಷಿತವಾಗಿರುವರು. ಆದ್ದರಿಂದ ನಿನ್ನ ಭಕ್ತನಾದ ನನ್ನ ಪ್ರಾರ್ಥನೆಗೂ ಕಿವಿಗೊಡು.

8 ನಿನ್ನ ಕಣ್ಣಿನ ಗುಡ್ಡೆಯಂತೆ ನನ್ನನ್ನು ಸಂರಕ್ಷಿಸು. ನಿನ್ನ ರೆಕ್ಕೆಗಳ ಮರೆಯಲ್ಲಿ ನನ್ನನ್ನು ಅಡಗಿಸಿಕೊ.

9 ಯೆಹೋವನೇ, ನನ್ನನ್ನು ನಾಶಮಾಡಬೇಕೆಂದಿರುವ ದುಷ್ಟರಿಂದ ನನ್ನನ್ನು ತಪ್ಪಿಸಿ ಕಾಪಾಡು. ನನಗೆ ಕೇಡು ಮಾಡಬೇಕೆಂದು ಸುತ್ತುಗಟ್ಟಿರುವ ಜನರಿಂದ ನನ್ನನ್ನು ಸಂರಕ್ಷಿಸು.

10 ಆ ದುಷ್ಟರು ಗರ್ವಿಷ್ಠರಾಗಿದ್ದಾರೆ. ಅವರು ಜಂಬ ಕೊಚ್ಚಿಕೊಳ್ಳುತ್ತಾರೆ.

11 ಅವರು ನನ್ನನ್ನು ಬೆನ್ನಟ್ಟಿ ಬಂದು ಸುತ್ತುಗಟ್ಟಿದ್ದಾರೆ; ಆಕ್ರಮಣಮಾಡಲು ಸಿದ್ಧರಾಗಿದ್ದಾರೆ.*

12 ಅವರು ಬೇಟೆಗಾಗಿ ಕಾಯುತ್ತಿರುವ ಸಿಂಹಗಳಂತಿದ್ದಾರೆ; ಅಡಗಿಕೊಂಡು ಹೊಂಚುಹಾಕುತ್ತಿರುವ ಪ್ರಾಯದ ಸಿಂಹಗಳಂತಿದ್ದಾರೆ.

13 ಯೆಹೋವನೇ, ಎದ್ದೇಳು;* ವೈರಿಗಳ ಬಳಿಗೆ ಹೋಗು. ಅವರನ್ನು ಶರಣಾಗತರನ್ನಾಗಿ ಮಾಡು. ನಿನ್ನ ಖಡ್ಗವನ್ನು ಪ್ರಯೋಗಿಸಿ ದುಷ್ಟರಿಂದ ನನ್ನನ್ನು ರಕ್ಷಿಸು.

14 ಯೆಹೋವನೇ, ಈ ಲೋಕಕ್ಕಾಗಿಯೇ ಜೀವಿಸುವ ಜನರಿಂದ ನನ್ನನ್ನು ತಪ್ಪಿಸಿ ಕಾಪಾಡು. ನಿನ್ನ ಸಹಾಯಕ್ಕಾಗಿ ಮೊರೆಯಿಡುವ ಅನೇಕರು ಕೊರತೆಯಲ್ಲಿದ್ದಾರೆ. ಅವರಿಗೆ ಆಹಾರವನ್ನು ಹೇರಳವಾಗಿ ದಯಪಾಲಿಸು. ಅವರ ಮಕ್ಕಳಿಗೂ ಮೊಮ್ಮಕ್ಕಳಿಗೂ ಬೇಕಾದದ್ದನ್ನೆಲ್ಲಾ ಒದಗಿಸಿ ಕೊಡು.

15 ನಾನು ನ್ಯಾಯಕ್ಕಾಗಿ ಪ್ರಾರ್ಥಿಸಿದ್ದರಿಂದ ನನಗೆ ನಿನ್ನ ಮುಖದ ದರ್ಶನವಾಗುವುದು. ಎಚ್ಚೆತ್ತಾಗ ನಿನ್ನ ಸ್ವರೂಪ ದರ್ಶನದಿಂದ ತೃಪ್ತನಾಗಿರುವೆನು.

## ಕೀರ್ತನೆ 18

*ಯೆಹೋವನು ದಾವೀದನನ್ನು ಸೌಲನಿಂದಲೂ ಅವನ ಸೈನ್ಯಗಳಿಂದಲೂ ರಕ್ಷಿಸಿದಾಗ ರಚಿಸಲ್ಪಟ್ಟಿತು.*

*ರಚನೆಗಾರ: ದಾವೀದ*

1 ನನ್ನ ಬಲವಾದ ಯೆಹೋವನೇ, ‘‘ನಿನ್ನನ್ನೇ ಪ್ರೀತಿಸುವೆನು!’’

2 ಯೆಹೋವನು ನನ್ನ ಬಂಡೆಯೂ,* ನನ್ನ ಕೋಟೆಯೂ, ನನ್ನ ಆಶ್ರಯಗಿರಿಯೂ, ನನ್ನ ಗುರಾಣಿಯೂ, ನನ್ನ ರಕ್ಷಣಾ ಬಲವೂ, ನನ್ನ ದುರ್ಗವೂ ಆಗಿದ್ದಾನೆ.

3 ಯೆಹೋವನಿಗೆ ಸ್ತೋತ್ರವಾಗಲಿ! ನಾನು ಆತನಿಗೆ ಮೊರೆಯಿಟ್ಟಾಗ ಆತನು ನನ್ನನ್ನು ವೈರಿಗಳಿಂದ ರಕ್ಷಿಸಿದನು.

4 ಮರಣಕರವಾದ ಹಗ್ಗಗಳು ನನ್ನನ್ನು ಬಿಗಿದುಕೊಂಡವು. ನಾಶಪ್ರವಾಹವು ನನ್ನನ್ನು ಪಾತಾಳಕ್ಕೆ* ಕೊಚ್ಚಿಕೊಂಡು ಹೋಗುತ್ತಿತ್ತು.

5 ಪಾತಾಳದ ಹಗ್ಗಗಳು ನನ್ನನ್ನ ಬಿಗಿದುಕೊಂಡಿದ್ದವು. ಮರಣಕರವಾದ ಉರುಲುಗಳು ನನ್ನೆದುರಿನಲ್ಲಿದ್ದವು.

6 ಆಗ ನಾನು ಸಹಾಯಕ್ಕಾಗಿ ಯೆಹೋವನನ್ನು ಕೂಗಿಕೊಂಡೆನು; ನನ್ನ ದೇವರಿಗೆ ಮೊರೆಯಿಟ್ಟೆನು. ಆತನು ತನ್ನ ಆಲಯದಲ್ಲಿ ನನ್ನ ಸ್ವರವನ್ನು ಕೇಳಿದನು; ನನ್ನ ಮೊರೆಗೆ ಕಿವಿಗೊಟ್ಟನು.

7 ಆಗ ಆತನಿಗೆ ಸಿಟ್ಟೇರಿದ್ದರಿಂದ ಭೂಮಿಯು ಗಡಗಡನೆ ನಡುಗಿತು; ಭೂಮಿಯ ಬುನಾದಿಗಳು ಕಂಪಿಸಿದವು.

8 ಆತನ ಮೂಗಿನಿಂದ ಹೊಗೆಯು ಬಂದಿತು; ಆತನ ಬಾಯಿಂದ ಅಗ್ನಿಜ್ವಾಲೆಯೂ ಬೆಂಕಿಯ ಕಿಡಿಗಳೂ ಬಂದವು.

9 ಆತನು ಆಕಾಶವನ್ನು ಹರಿದು ಕೆಳಗಿಳಿದು ಬಂದನು. ಆತನು ದಟ್ಟವಾದ ಕಪ್ಪುಮೋಡದ ಮೇಲೆ ನಿಂತುಕೊಂಡನು.

10 ಕೆರೂಬಿಗಳ ಮೇಲೆ ಆಸೀನನಾಗಿ ವಾಯುವೇ ತನ್ನ ರೆಕ್ಕೆಗಳೋ ಎಂಬಂತೆ ಹಾರಿಬಂದನು.

11 ಆತನನ್ನು ಗುಡಾರದಂತೆ ಆವರಿಸಿಕೊಂಡಿದ್ದ ದಟ್ಟವಾದ ಕಪ್ಪುಮೋಡದಲ್ಲಿ ಆತನು ಮರೆಯಾದನು.

12 ಬಳಿಕ, ಆತನ ಉಜ್ವಲವಾದ ಪ್ರಕಾಶವು ಮೋಡಗಳನ್ನು ಭೇದಿಸಿಕೊಂಡು ನುಗ್ಗಲು ಆಲಿಕಲ್ಲಿನ ಮಳೆಯು ಸುರಿಯಿತು; ಮಿಂಚುಗಳು ಹೊಳೆದವು.

13 ಯೆಹೋವನು ಆಕಾಶದಲ್ಲಿ ಗುಡುಗಿದನು; ಮಹೋನ್ನತ ದೇವರು ತನ್ನ ಧ್ವನಿಯನ್ನು ಕೇಳುವಂತೆ ಮಾಡಿದನು. ಆಲಿಕಲ್ಲಿನ ಮಳೆಯು ಸುರಿಯಿತು; ಮಿಂಚುಗಳು ಹೊಳೆದವು.

14 ಆತನು ಬಾಣಗಳನ್ನು* ಎಸೆದು ವೈರಿಗಳನ್ನು ಚದರಿಸಿಬಿಟ್ಟನು; ಸಿಡಿಲು ಮಿಂಚುಗಳಿಂದ ಅವರನ್ನು ಕಳವಳಗೊಳಿಸಿದನು.

---

**ಆಕ್ರಮಣಮಾಡಲು ಸಿದ್ಧರಾಗಿದ್ದಾರೆ** ಅಕ್ಷರಶಃ, ‘‘ಅವರು ನೆಲದ ಮೇಲೆ ಬೀಳಿಸಲು ದೃಷ್ಟಿಯಿಟ್ಟಿದ್ದಾರೆ.’’

**ಯೆಹೋವನೇ, ಎದ್ದೇಳು,** ಒಡಂಬಡಿಕೆಯ ಪೆಟ್ಟಿಯನ್ನು ಎತ್ತಿದಾಗ ಮತ್ತು ತಮ್ಮೊಂದಿಗೆ ಅದನ್ನು ಯುದ್ಧದೊಳಗೆ ತೆಗೆದುಕೊಂಡು ಹೋದಾಗ ಜನರು ಇದನ್ನು ಹೇಳಿದರು. ದೇವರು ಅವರೊಂದಿಗೆ ಇದ್ದನು ಎಂಬುದನ್ನು ಇದು ತೋರಿಸುತ್ತದೆ. ಅರಣ್ಯಕಾಂಡ 10:35,36ನೆಯ ವಚನಗಳನ್ನು ನೋಡಿರಿ.

**ಬಂಡೆ** ದೇವರ ಹೆಸರು. ಆತನು ಕೋಟೆಯಂತಿದ್ದಾನೆ ಅಥವಾ ಬಲವಾದ ಸುರಕ್ಷಿತ ಸ್ಥಳದಂತಿದ್ದಾನೆ ಎಂಬುದನ್ನು ಇದು ತೋರಿಸುತ್ತದೆ.

**ಪಾತಾಳ** ಅಕ್ಷರಶಃ ‘‘ಜನರು ಹಿಂತಿರುಗದ ಸ್ಥಳ’’ ಅಥವಾ ಸಮಾಧಿ.

**ಬಾಣಗಳು** ಅಂದರೆ ‘‘ಮಿಂಚು.’’

15 ಯೆಹೋವನೇ, ನೀನು ಆಜ್ಞಾಪಿಸಿದಾಗ ಬಿರು
ಗಾಳಿಯು ಬೀಸತೊಡಗಿ ನೀರನ್ನು ನೂಕಲು
ಸಮುದ್ರದ ತಳವೇ ಕಾಣಿಸಿತು. ಭೂಮಿಯ ಅಸ್ತಿ
ವಾರಗಳೂ ಕಾಣಿಸಿದವು.

16 ಆತನು ಮೇಲಿಂದ ಕೈಚಾಚಿ ನನ್ನನ್ನು ರಕ್ಷಿಸಿದನು.
ಆತನು ನನ್ನ ಕೈಹಿಡಿದು ನೀರಿನಿಂದ ಮೇಲೆತ್ತಿದನು.

17 ನನ್ನನ್ನು ದ್ವೇಷಿಸುವ ವೈರಿಗಳು ನನಗಿಂತಲೂ ಬಲ
ವಾಗಿಯೂ ಶಕ್ತರಾಗಿಯೂ ಇದ್ದರು; ಆತನು ನನ್ನನ್ನು
ಅವರಿಂದ ರಕ್ಷಿಸಿದನು.

18 ನಾನು ನನ್ನ ಕಷ್ಟದಲ್ಲಿದ್ದಾಗ ಅವರು ನನ್ನ ಮೇಲೆ ಆಕ್ರ
ಮಣ ಮಾಡಲು, ಯೆಹೋವನು ನನಗೆ ಸಹಾಯಕ
ನಾಗಿ ಬಂದನು.

19 ಆತನು ನನ್ನನ್ನು ಪ್ರೀತಿಸುವುದರಿಂದ ನನ್ನನ್ನು ರಕ್ಷಿಸಿ
ದನು; ನನ್ನನ್ನು ಸುರಕ್ಷಿತವಾದ ಸ್ಥಳಕ್ಕೆ ಕರೆದುಕೊಂಡು
ಬಂದನು.

20 ನಾನು ನಿರಪರಾಧಿಯಾಗಿದ್ದರಿಂದ ಯೆಹೋವನು
ನನಗೆ ಪ್ರತಿಫಲ ನೀಡಿದನು; ನಾನು ತಪ್ಪನ್ನು ಮಾಡಿ
ಲ್ಲದ ಕಾರಣ ನನಗೆ ಒಳ್ಳೆಯದನ್ನು ಮಾಡಿದನು.

21 ಯಾಕಂದರೆ ನಾನು ಯೆಹೋವನಿಗೆ ವಿಧೇಯ
ನಾಗಿದ್ದೆನು; ನನ್ನ ದೇವರ ವಿರೋಧವಾಗಿ ನಾನು
ಪಾಪಮಾಡಲಿಲ್ಲ.

22 ನಾನು ಆತನ ಕಟ್ಟಳೆಗಳನ್ನೂ ಆಜ್ಞೆಗಳನ್ನೂ
ಯಾವಾಗಲೂ ಜ್ಞಾಪಿಸಿಕೊಳ್ಳುವೆ.

23 ಆತನ ಎದುರಿನಲ್ಲಿ ನಿರ್ದೋಷಿಯಾಗಿದ್ದೆನು.
ಪಾಪದಲ್ಲಿ ಬೀಳದಂತೆ ಎಚ್ಚರಿಕೆಯಾಗಿದ್ದೆನು.

24 ಯೆಹೋವನ ದೃಷ್ಟಿಯಲ್ಲಿ ನಾನು ನೀತಿವಂತನೂ
ನಿರಪರಾಧಿಯೂ ಆಗಿರುವುದರಿಂದ ಆತನು ನನಗೆ
ತಕ್ಕ ಪ್ರತಿಫಲವನ್ನು ಕೊಟ್ಟನು.

25 ಯೆಹೋವನೇ, ನಿನ್ನನ್ನು ನಿಜವಾಗಿಯೂ ಪ್ರೀತಿಸು
ವವರನ್ನು ನೀನು ಶಾಶ್ವತವಾದ ಪ್ರೀತಿಯಿಂದ ಪ್ರೀತಿ
ಸುವೆ. ನಿನಗೆ ನಂಬಿಗಸ್ತರಾಗಿರುವವರಿಗೆ ನೀನೂ
ನಂಬಿಗಸ್ತನಾಗಿರುವೆ.

26 ನೀನು ಒಳ್ಳೆಯವರಿಗೂ ಶುದ್ಧರಿಗೂ ಒಳ್ಳೆಯವ
ನಾಗಿಯೂ ಪರಿಶುದ್ಧನಾಗಿಯೂ ಇರುವೆ; ದುಷ್ಟರಿ
ಗಾದರೊ ಶತ್ರುವಾಗಿರುವೆ.

27 ಯೆಹೋವನೇ,ನೀನು ದೀನರಿಗೆಸಹಾಯಮಾಡುವೆ.
ಗರ್ವಿಷ್ಠರಿಗಾದರೊ ಅವಮಾನ ಮಾಡುವೆ.

28 ಯೆಹೋವನೇ, ನನ್ನ ದೀಪವನ್ನು ಹೊತ್ತಿಸುವವನು
ನೀನೇ. ನನ್ನ ದೇವರು ನನ್ನ ಸುತ್ತಲೂ ಇರುವ ಕತ್ತಲೆ
ಯನ್ನು ಬೆಳಕನ್ನಾಗಿ ಮಾಡುವನು.

29 ಯೆಹೋವನೇ, ನಿನ್ನ ಸಹಾಯದಿಂದ ನಾನು ಸೈನಿಕ
ರೊಡನೆ ಓಡಬಲ್ಲೆ. ದೇವರ ಸಹಾಯದಿಂದ ನಾನು
ಶತ್ರುಗಳ ಕೋಟೆಗಳನ್ನು ಹತ್ತುವೆನು.

30 ದೇವರ ಮಾರ್ಗಗಳು ನಿಷ್ಕಳಂಕವಾಗಿವೆ; ಯೆಹೋ
ವನ ಮಾತುಗಳು ಸತ್ಯವಾಗಿವೆ. ಆತನು ತನ್ನಲ್ಲಿ ಭರವಸೆ
ವಿಟ್ಟಿರುವವರನ್ನು ಸಂರಕ್ಷಿಸುವನು.

31 ಯೆಹೋವನಲ್ಲದೆ ಬೇರೆ ಯಾವ ದೇವರೂ ಇಲ್ಲ.
ನಮ್ಮ ದೇವರಲ್ಲದೆ ಬೇರೆ ಯಾವ ಬಂಡೆಯೂ ಇಲ್ಲ.

32 ಆತನೇ, ನನಗೆ ಬಲವನ್ನು ಕೊಡುವನು; ಶುದ್ಧ ಜೀವನ
ವನ್ನು ನಡೆಸಲು ನನಗೆ ಸಹಾಯಮಾಡುವನು.

33 ಆತನು ನನ್ನ ಪಾದಗಳನ್ನು ಜಿಂಕೆಯಂತೆ* ವೇಗ
ಗೊಳಿಸುವನು. ಆತನು ನನ್ನನ್ನು ಸ್ಥಿರಗೊಳಿಸುವನು;
ಎತ್ತರವಾದ ಸ್ಥಳಗಳಲ್ಲಿ ಬೀಳದಂತೆ ದೃಢಪಡಿಸುವನು.

34 ಆತನು ನನ್ನನ್ನು ಯುದ್ಧಕ್ಕೆ ತರಬೇತಿಗೊಳಿಸುವನು.
ಆದ್ದರಿಂದ ನನ್ನ ತೋಳುಗಳು ದೊಡ್ಡ ಬಿಲ್ಲಿನಿಂದ
ಬಾಣವನ್ನು ಎಸೆಯಬಲ್ಲವು. ಆದ್ದರಿಂದ ನಾನು ಬಲ
ವಾದ ಬಿಲ್ಲಿನ ತಂತಿಯನ್ನು ಎಸೆಯಬಲ್ಲೆ.

35 ದೇವರೇ, ನಿನ್ನ ವಿಜಯದ ಗುರಾಣಿಯನ್ನು ನೀನು
ನನಗೆ ಕೊಟ್ಟಿರುವೆ. ನಿನ್ನ ಬಲಗೈ ನನಗೆ ಆಧಾರ ನೀಡು
ತ್ತದೆ. ನೀನು ನನ್ನನ್ನು ಪದೇಪದೇ ಬಲಗೊಳಿಸಿರುವೆ.

36 ದೇವರೇ, ನಾನು ಮುಗ್ಗರಿಸದೆ ನಡೆಯಲು ನನ್ನ
ಕಾಲುಗಳನ್ನೂ ಹರಡುಗಳನ್ನೂ ಬಲಗೊಳಿಸು;

37 ಆಗ ನಾನು ಶತ್ರುಗಳನ್ನು ಬೆನ್ನಟ್ಟಿ ಹಿಡಿಯಲು ಶಕ್ತ
ನಾಗುವೆ. ಅವರನ್ನು ನಾಶಮಾಡುವ ತನಕ ನಾನು
ಹಿಂತಿರುಗಿ ಬರುವುದಿಲ್ಲ.

38 ನಾನು ನನ್ನ ಶತ್ರುಗಳನ್ನು ಸೋಲಿಸಿ ಅವನನ್ನು ಏಳ
ಲಾರದಂತೆ ಮಾಡುವೆನು; ನನ್ನ ಶತ್ರುಗಳು ನನ್ನ
ಪಾದಗಳ ಕೆಳಗೇ ಇರುವರು.

ದೇವರೇ, ಯುದ್ಧದಲ್ಲಿ ನೀನು ನನ್ನನ್ನು ಬಲಿಷ್ಠನನ್ನಾಗಿ
ಮಾಡಿದೆ; ಎಲ್ಲಾ ಶತ್ರುಗಳು ನನ್ನ ಎದುರಿನಲ್ಲಿ ಬೀಳು
ವಂತೆ ಮಾಡಿದೆ.

40 ನನ್ನ ಶತ್ರುಗಳಿಗೆ ಕತ್ತಿನ ಮೇಲೆ ಹೊಡೆದು ಕೆಳಗುರು
ಳಿಸಲು ನೀನು ನನಗೆ ಅವಕಾಶನೀಡಿದೆ.

41 ನನ್ನ ಶತ್ರುಗಳು ಸಹಾಯಕ್ಕಾಗಿ ಕೂಗಿಕೊಂಡರು.
ಆದರೆ ಅವರನ್ನು ರಕ್ಷಿಸಲು ಯಾರೂ ಇರಲಿಲ್ಲ.
ಅವರು ಯೆಹೋವನನ್ನೂ ಕೂಗಿಕೊಂಡರು; ಆದರೆ
ಆತನೂ ಅವರಿಗೆ ಉತ್ತರಿಸಲಿಲ್ಲ.

42 ನನ್ನ ಶತ್ರುಗಳನ್ನು ಹೊಡೆದು ತುಂಡುತುಂಡು ಮಾಡು
ವೆನು; ಜಜ್ಜಿ ಪುಡಿಪುಡಿ ಮಾಡುವೆನು; ಗಾಳಿ ಬಡಿದು
ಕೊಂಡು ಹೋಗುವ ಧೂಳಿನಂತೆ ಅವರಾಗುವರು.

43 ನನ್ನ ವಿರೋಧಿಗಳಿಂದ ನನ್ನನ್ನು ರಕ್ಷಿಸು. ಆ ಜನಾಂಗ
ಗಳಿಗೆ ನನ್ನನ್ನು ನಾಯಕನನ್ನಾಗಿ ಮಾಡು. ನನಗೆ
ಗೊತ್ತಿಲ್ಲದವರೂ ನನ್ನ ಸೇವೆಮಾಡುವರು.

44 ಅವರು ನನ್ನ ಕುರಿತಾಗಿ ಕೇಳಿದ ಕೂಡಲೇ ವಿಧೇಯ
ರಾಗುವರು. ಆ ವಿದೇಶಿಯರು ನನ್ನ ವಿಷಯದಲ್ಲಿ
ಭಯದಿಂದಿರುವರು.

---

***ಜಿಂಕೆ*** ಅಕ್ಷರಶಃ, ಹೆಣ್ಣು ಜಿಂಕೆ.

45 ಆ ವಿದೇಶಿಯರು ಧೈರ್ಯವಿಲ್ಲದವರಾಗಿ ನಡುಗುತ್ತಾ
ತಮ್ಮ ಕೋಟೆಗಳಿಂದ ಬರುವರು.
46 ಯೆಹೋವನು ಜೀವಸ್ವರೂಪನಾಗಿದ್ದಾನೆ. ನನ್ನ ಬಂಡೆ
ಯಾಗಿರುವ ಆತನನ್ನು ಸ್ತುತಿಸುವೆನು. ನನ್ನನ್ನು
ರಕ್ಷಿಸುವ ದೇವರು ಮಹೋನ್ನತನಾಗಿದ್ದಾನೆ.
47 ದೇವರು ನನ್ನ ವೈರಿಗಳನ್ನು ದಂಡಿಸಿ ಅವರನ್ನು ನನಗೆ
ಅಧೀನಪಡಿಸಿದ್ದಾನೆ.
48 ಯೆಹೋವನೇ, ಶತ್ರುಗಳಿಂದ ನೀನು ನನ್ನನ್ನು ಕಾಪಾ
ಡಿದೆ, ನನ್ನ ವಿರೋಧಿಗಳನ್ನು ಸೋಲಿಸಲು ನೀನು
ನನಗೆ ಸಹಾಯ ಮಾಡಿದೆ; ಕ್ರೂರಿಗಳಿಂದ ನನ್ನನ್ನು
ರಕ್ಷಿಸಿದೆ.
49 ಯೆಹೋವನೇ, ಈ ಕಾರಣದಿಂದ ನಾನು ನಿನ್ನನ್ನು
ಜನಾಂಗಗಳ ಮಧ್ಯದಲ್ಲಿ ಸ್ತುತಿಸುವೆನು; ನಿನ್ನ ಹೆಸ
ರನ್ನು ಕುರಿತು ಹಾಡುಗಳನ್ನು ಹಾಡುವೆನು.
50 ಯೆಹೋವನು ತಾನು ನೇಮಿಸಿದ ರಾಜನಿಗೆ ಅನೇಕ
ಯುದ್ಧಗಳಲ್ಲಿ ಜಯವನ್ನು ದಯಪಾಲಿಸುವನು;
ತಾನು ಅಭಿಷೇಕಿಸಿದ ರಾಜನಿಗೆ ಶಾಶ್ವತವಾದ ಪ್ರೀತಿ
ಯನ್ನು ತೋರುವನು. ಆತನು ದಾವೀದನಿಗೂ ಅವನ
ಸಂತತಿಯವರಿಗೂ ಎಂದೆಂದಿಗೂ ನಂಬಿಗಸ್ತ
ನಾಗಿರುವನು.

## ಕೀರ್ತನೆ 19

*ರಚನೆಗಾರ: ದಾವೀದ*

1 ಆಕಾಶಮಂಡಲವು ದೇವರ ಮಹಿಮೆಯನ್ನು ಪ್ರಕಟಿ
ಸುವುದು. ಗಗನವು ಆತನ ಕೈಕೆಲಸವನ್ನು ತಿಳಿಸುವುದು.
2 ಪ್ರತಿಯೊಂದು ದಿನವೂ ಅದರ ಕುರಿತು ಹೊಸ
ವಿಷಯವನ್ನು ತಿಳಿಸುವುದು. ಪ್ರತಿಯೊಂದು
ರಾತ್ರಿಯೂ ಅದರ ಕುರಿತು ಹೊಸ ಸಂಗತಿಯನ್ನು
ಪ್ರಕಟಿಸುವುದು.
3 ಅವುಗಳ ಮಾತಾಗಲೀ ನುಡಿಗಳಾಗಲೀ ಸ್ವರವಾಗಲೀ
ನಮಗೆ ಕೇಳಿಸದು.
4 ಆದರೆ ಅವುಗಳ ಸಂದೇಶವು ಭೂಲೋಕದಲ್ಲೆಲ್ಲಾ
ಹರಡುತ್ತದೆ; ಭೂಮಿಯ ಕಟ್ಟಕಡೆಗಳವರೆಗೂ ವ್ಯಾಪಿ
ಸುತ್ತದೆ. ಆಕಾಶವು ಸೂರ್ಯನಿಗೆ ಮನೆಯಂತಿದೆ.
5 ಮದುವೆಯ ಮಂಟಪದಿಂದ ಆನಂದದಿಂದ ಬರುವ
ಮದು ಮಗನಂತೆ ಸೂರ್ಯನು ಮುಂಜಾನೆ ಉದಯಿ
ಸುವನು. ಕ್ರೀಡಾಪಟುವಿನಂತೆ ಸೂರ್ಯನು ಆಕಾಶ
ದಲ್ಲಿ ಓಡಲಾರಂಭಿಸುವನು.
6 ಸೂರ್ಯನು ಆಕಾಶದ ಒಂದು ಕಡೆಯಿಂದ ಉದ
ಯಿಸಿ ಮತ್ತೊಂದು ಕೊನೆಗೆ ಓಡುತ್ತಾ ಹೋಗುವನು.
ಅವನ ತಾಪಕ್ಕೆ ಯಾವುದೂ ಮರೆಯಾಗಿರಲಾರದು.
ಯೆಹೋವನ ಉಪದೇಶಗಳು ಅದೇ ರೀತಿಯಲ್ಲಿವೆ.
7 ಯೆಹೋವನ ಉಪದೇಶಗಳು ನಿಷ್ಕಳಂಕವಾಗಿವೆ.
ಅವು ದೇವಜನರಿಗೆ ಬಲವನ್ನು ಕೊಡುತ್ತವೆ. ಯೆಹೋ
ವನ ಒಡಂಬಡಿಕೆಯು ಭರವಸೆಗೆ ಯೋಗ್ಯವಾಗಿದೆ.
ಅದು ಮೂಢರನ್ನು ಜ್ಞಾನಿಗಳನ್ನಾಗಿ ಮಾಡುತ್ತದೆ.
8 ಯೆಹೋವನ ಕಟ್ಟಳೆಗಳು ನೀತಿಯ ಕಟ್ಟಳೆಗಳಾಗಿವೆ.
ಅವು ಮನಸ್ಸನ್ನು ಸಂತೋಷಗೊಳಿಸುತ್ತವೆ. ಯೆಹೋ
ವನ ಆಜ್ಞೆಗಳು ಒಳ್ಳೆಯ ಆಜ್ಞೆಗಳಾಗಿವೆ. ಅವು ಕಣ್ಣು
ಗಳಿಗೆ ಬೆಳಕನ್ನು ನೀಡುತ್ತವೆ.
9 ಯೆಹೋವನಲ್ಲಿಡುವ ಭಯಭಕ್ತಿಯು ಪರಿಶುದ್ಧ
ವಾಗಿದೆ; ಅದು ಶಾಶ್ವತವಾದದ್ದು. ಯೆಹೋವನ ವಿಧಿ
ಗಳು ಯಥಾರ್ಥವಾಗಿವೆ; ಅವು ಯಾವಾಗಲೂ
ನ್ಯಾಯಾನುಸಾರವಾಗಿವೆ.
10 ಆತನ ಉಪದೇಶಗಳು ಬಂಗಾರಕ್ಕಿಂತಲೂ ಅಮೂಲ್ಯ
ವಾಗಿವೆ; ಅಪ್ಪಟವಾದ ಜೇನುತುಪ್ಪಕ್ಕಿಂತಲೂ ಮಧುರ
ವಾಗಿವೆ.
11 ಆತನ ಉಪದೇಶಗಳು ಆತನ ಸೇವಕನನ್ನು ಎಚ್ಚರಿ
ಸುತ್ತವೆ; ಅವುಗಳನ್ನು ಕೈಕೊಂಡು ನಡೆದರೆ ಒಳ್ಳೆಯ
ದಾಗುವುದು.
12 ಯೆಹೋವನೇ, ಯಾವನೂ ತನ್ನ ತಪ್ಪುಗಳನ್ನೆಲ್ಲಾ
ತಿಳಿದುಕೊಳ್ಳುವುದಿಲ್ಲ. ಆದ್ದರಿಂದ ಗುಪ್ತ ಪಾಪಗಳನ್ನು
ಮಾಡಲು ನನ್ನನ್ನು ಬಿಟ್ಟುಬಿಡಬೇಡ.
13 ನನ್ನ ಇಷ್ಟಾನುಸಾರ ಪಾಪಮಾಡಲು ನನ್ನನ್ನು ಬಿಟ್ಟು
ಬಿಡಬೇಡ. ಆ ಪಾಪಗಳು ನನ್ನನ್ನು ಆಳದಿರಲಿ. ನೀನು
ಸಹಾಯಮಾಡಿದರೆ ನಾನು ಪರಿಶುದ್ಧನಾಗಿಯೂ
ಪಾಪದಿಂದ ವಿಮುಕ್ತನಾಗಿಯೂ ಇರಲು ಸಾಧ್ಯ.
14 ನನ್ನ ಮಾತುಗಳೂ ನನ್ನ ಆಲೋಚನೆಗಳೂ ನಿನಗೆ
ಮೆಚ್ಚಿಕೆಯಾಗಿರಲಿ. ಯೆಹೋವನೇ, ನೀನೇ ನನ್ನ
ಬಂಡೆಯಾಗಿರುವೆ.* ನನ್ನನ್ನು ರಕ್ಷಿಸುವಾತನು
ನೀನೇ.

## ಕೀರ್ತನೆ 20

*ರಚನೆಗಾರ: ದಾವೀದ*

1 ಇಕ್ಕಟ್ಟಿನಲ್ಲಿ ಯೆಹೋವನು ನಿನ್ನ ಮೊರೆಯನ್ನು
ಕೇಳಲಿ. ಯಾಕೋಬನ ದೇವರು ನಿನ್ನ ಹೆಸರನ್ನು
ಪ್ರಖ್ಯಾತಿಪಡಿಸಲಿ.
2 ಆತನು ತನ್ನ ಪವಿತ್ರ ಸ್ಥಳದಿಂದ ನಿನಗೆ ಸಹಾಯ
ಮಾಡಲಿ. ಚೀಯೋನಿನಿಂದ* ನಿನಗೆ ಆಧಾರ
ನೀಡಲಿ.

---

**ಬಂಡೆ** ಕೆಲವು ಸಲ, ಸೂರ್ಯನ ತಾಪದಿಂದ ತಪ್ಪಿಸಿಕೊಳ್ಳಲು ಜನರು ಆಶ್ರಯಿಸುವ ವಿಶಾಲವಾದ ಬಂಡೆ ಎಂಬರ್ಥವನ್ನು ಇದು ಕೊಡುತ್ತದೆ. ಇನ್ನೂ ಕೆಲವು ಸಲ, ತಮ್ಮ ವೈರಿಗಳಿಂದ ತಪ್ಪಿಸಿಕೊಂಡು ಸಂರಕ್ಷಣೆಗಾಗಿ ಜನರು ಓಡಿಹೋಗುವ ಕೋಟೆ ಎಂಬರ್ಥವನ್ನು ಇದು ಕೊಡುತ್ತದೆ.

**ಚೀಯೋನ್** ಜೆರುಸಲೇಮ್ ಕಟ್ಟಲ್ಪಟ್ಟಿರುವ ಬೆಟ್ಟದ ಆಗ್ನೇಯ ಭಾಗ. ಕೆಲವು ಸಲ, ಜೆರುಸಲೇಮಿನಲ್ಲಿ ವಾಸಿಸುವ ದೇವ ಜನರು ಎಂಬರ್ಥ ವನ್ನು ಇದು ಕೊಡುತ್ತದೆ.

3 ನೀನು ಅರ್ಪಿಸಿದ ಕಾಣಿಕೆಗಳನ್ನೆಲ್ಲ ಆತನು ಜ್ಞಾಪಿಸಿ
ಕೊಳ್ಳಲಿ. ನಿನ್ನ ಯಜ್ಞಗಳನ್ನೆಲ್ಲ ಆತನು ಸ್ವೀಕರಿಸಿ
ಕೊಳ್ಳಲಿ.
4 ಆತನು ನಿನ್ನ ಬಯಕೆಗಳನ್ನು ಈಡೇರಿಸಲಿ. ನಿನ್ನ
ಆಲೋಚನೆಗಳನ್ನೆಲ್ಲ ನೆರವೇರಿಸಲಿ.
5 ದೇವರು ನಿನಗೆ ಸಹಾಯ ಮಾಡುವಾಗ ಹರ್ಷಿಸು
ವೆವು. ಆತನ ಹೆಸರನ್ನು ಕೊಂಡಾಡೋಣ. ಯೆಹೋ
ವನು ನಿನ್ನ ಕೋರಿಕೆಗಳನ್ನೆಲ್ಲ ನೆರವೇರಿಸಲಿ.
6 ಯೆಹೋವನು ತಾನು ಅಭಿಷೇಕಿಸಿದ ರಾಜನಿಗೆ
ಸಹಾಯ ಮಾಡುತ್ತಾನೆಂದು ಈಗ ನನಗೆ ಗೊತ್ತಾ
ಯಿತು. ದೇವರು ತಾನು ಆರಿಸಿಕೊಂಡ ರಾಜನಿಗೆ ಪರ
ಲೋಕದಿಂದ ಉತ್ತರಿಸಿದನು; ತನ್ನ ಮಹಾಶಕ್ತಿಯಿಂದ
ಅವನನ್ನು ರಕ್ಷಿಸಿದನು.
7 ಕೆಲವರು ತಮ್ಮ ರಥಗಳಲ್ಲಿ ಭರವಸವಿಡುವರು. ಕೆಲ
ವರು ತಮ್ಮ ಸೈನಿಕರುಗಳಲ್ಲಿ ಭರವಸವಿಡುವರು.
ನಾವಾದರೊ ನಮ್ಮ ದೇವರಾದ ಯೆಹೋವನನ್ನೇ
ಜ್ಞಾಪಿಸಿಕೊಳ್ಳುವೆವು.
8 ಅವರು ಸೋತುಹೋದರು; ಯುದ್ಧದಲ್ಲಿ ಸತ್ತು
ಹೋದರು; ನಾವಾದರೊ ಜಯಗಳಿಸಿದೆವು ! ನಾವು
ಜಯಪ್ರದರಾಗಿ ನಿಂತುಕೊಳ್ಳುವೆವು !
9 ಯಾಕಂದರೆ ಯೆಹೋವನು ತಾನು ಅಭಿಷೇಕಿಸಿದ
ರಾಜನನ್ನು ರಕ್ಷಿಸಿದನು! ನಾವು ಸಹಾಯಕ್ಕಾಗಿ ಮೊರೆ
ಯಿಟ್ಟಾಗ ಆತನು ಸದುತ್ತರವನ್ನು ದಯಪಾಲಿಸಿದನು.

## ಕೀರ್ತನೆ 21

*ರಚನೆಗಾರ: ದಾವೀದ*

1 ಯೆಹೋವನೇ, ನಿನ್ನ ಬಲವು ರಾಜನನ್ನು ಸಂತೋಷ
ಗೊಳಿಸುವುದು. ನಿನ್ನ ರಕ್ಷಣೆಯು ಅವನನ್ನು ಹರ್ಷ
ಗೊಳಿಸುವುದು.
2 ರಾಜನು ನಿನ್ನಲ್ಲಿ ಪ್ರಾರ್ಥಿಸಿದಾಗ ನೀನು ಅವನ
ಕೋರಿಕೆಗಳನ್ನೆಲ್ಲಾ ಈಡೇರಿಸಿದೆ.
3 ನೀನು ರಾಜನನ್ನು ಬಹಳವಾಗಿ ಆಶೀರ್ವದಿಸಿರುವೆ.
ಅವನ ತಲೆಗೆ ಬಂಗಾರದ ಕಿರೀಟವನ್ನು ತೊಡಿಸಿರುವೆ.
4 ಅವನು ದೀರ್ಘಾಯುಷ್ಯನ್ನು ಕೇಳಿಕೊಂಡಾಗ ನೀನು
ದಯಪಾಲಿಸಿದೆ. ದೇವರೇ, ನೀನು ರಾಜನಿಗೆ ಶಾಶ್ವತ
ವಾದ ಜೀವಿತವನ್ನು ಅನುಗ್ರಹಿಸಿದೆ.
5 ನೀನು ರಾಜನಿಗೆ ಜಯವನ್ನು ದೊರಕಿಸಿ ಅವನಿಗೆ
ಗೌರವವನ್ನೂ ಹೊಗಳಿಕೆಯನ್ನೂ ಬರಮಾಡಿದೆ.
6 ನೀನು ರಾಜನಿಗೆ ಶಾಶ್ವತವಾದ ಆಶೀರ್ವಾದವನ್ನು
ಕೊಟ್ಟಿರುವೆ. ಅವನು ನಿನ್ನ ಸನ್ನಿಧಿಯಲ್ಲಿ ಅತ್ಯಾನಂದ
ಪಡುವನು.
7 ರಾಜನು ಯೆಹೋವನಲ್ಲಿಯೇ ಭರವಸವಿಟ್ಟಿದ್ದಾನೆ;
ಮಹೋನ್ನತನಾದ ದೇವರು ಅವನನ್ನು ನಿರಾಶೆಗೊಳಿ
ಸುವುದಿಲ್ಲ.
8 ದೇವರೇ, ನಿನ್ನ ಬಲಿಷ್ಠತನವನ್ನು ನಿನ್ನ ಶತ್ರುಗಳಿಗೆಲ್ಲ
ನೀನು ತೋರಿಸುವೆ. ನೀನು ದ್ವೇಷಿಸುವವರನ್ನು ನಿನ್ನ
ಶಕ್ತಿಯು ಸೋಲಿಸುವುದು.
9 ಯೆಹೋವನೇ, ನೀನು ರಾಜನೊಂದಿಗಿರುವಾಗ
ಅವನು ಉರಿಯುವ ಕುಲಿಮೆಯಂತಿರುವನು. ಅವನ
ಕೋಪವು ಧಗಧಗಿಸುವ ಬೆಂಕಿಯಂತೆ ಸುಡುವುದು;
ಅವನು ಶತ್ರುಗಳನ್ನು ನಾಶಮಾಡುವನು.
10 ಅವನ ಶತ್ರುಗಳ ಕುಟುಂಬಗಳು ನಾಶವಾಗುತ್ತವೆ;
ಅವು ಭೂಮಿಯ ಮೇಲೆ ಇಲ್ಲವಾಗುತ್ತವೆ.
11 ಯಾಕಂದರೆ, ಅವರು ನಿನಗೆ ವಿರೋಧವಾಗಿ ದುರಾ
ಲೋಚನೆಗಳನ್ನು ಮಾಡಿದರು. ಅವರು ಕುತಂತ್ರ
ಗಳನ್ನು ಮಾಡಿದರೂ ಯಶಸ್ವಿಯಾಗಲಿಲ್ಲ.
12 ನಿನ್ನ ಬಿಲ್ಲುಗಳಿಂದ ಬಾಣಗಳನ್ನು ನೀನು ಎಸೆಯು
ವಾಗ ಅವರು ಬೆನ್ನುಕೊಟ್ಟು ಓಡಿಹೋಗುವರು.
13 ಯೆಹೋವನೇ, ನಿನ್ನ ಪರಾಕ್ರಮಕ್ಕಾಗಿ ನಿನ್ನನ್ನು
ಕೊಂಡಾಡುವೆನು. ನಿನ್ನ ಮಹತ್ವದ ಬಗ್ಗೆ ವಾದ್ಯ
ನುಡಿಸುತ್ತಾ ಹಾಡುವೆವು.

## ಕೀರ್ತನೆ 22

*ರಚನೆಗಾರ: ದಾವೀದ*

1 ನನ್ನ ದೇವರೇ, ನನ್ನ ದೇವರೇ! ಯಾಕೆ ನನ್ನನ್ನು
ತೊರೆದಿರುವೆ? ನನ್ನನ್ನು ರಕ್ಷಿಸದೆ ಯಾಕೆ ಬಹುದೂರ
ವಾಗಿರುವೆ! ಸಹಾಯಕ್ಕಾಗಿ ನಾನು ಗೋಳಾಡುತ್ತಿ
ದ್ದರೂ ಕೇಳದೆ ಯಾಕೆ ಬಹುದೂರವಾಗಿರುವೆ?
2 ನನ್ನ ದೇವರೇ, ಹಗಲಿನಲ್ಲಿ ನಾನು ನಿನ್ನನ್ನು ಕೂಗಿ
ಕೊಂಡೆನು, ಆದರೂ ನೀನು ನನಗೆ ಉತ್ತರಿಸಲಿಲ್ಲ.
ರಾತ್ರಿಯಲ್ಲೂ ನಿನ್ನನ್ನು ಕೂಗಿಕೊಳ್ಳುತ್ತಲೇ ಇದ್ದೆನು.
3 ದೇವರೇ, ಪರಿಶುದ್ಧನು ನೀನೇ. ನೀನು ರಾಜನಂತೆ
ಕುಳಿತಿರುವೆ. ಇಸ್ರೇಲರ ಸ್ತುತಿಗಳೇ ನಿನ್ನ ಸಿಂಹಾಸನ.
4 ನಮ್ಮ ಪೂರ್ವಿಕರು ನಿನ್ನಲ್ಲಿ ಭರವಸವಿಟ್ಟಿದ್ದರು.
ಅವರು ನಿನ್ನಲ್ಲಿಯೇ ಭರವಸವಿಟ್ಟಿದ್ದರು. ನೀನು
ಅವರನ್ನು ರಕ್ಷಿಸಿದೆ.
5 ನಮ್ಮ ಪೂರ್ವಿಕರು ನಿನ್ನಲ್ಲಿ ಮೊರೆಯಿಟ್ಟಾಗ ಅವ
ರನ್ನು ಶತ್ರುಗಳಿಂದ ಬಿಡಿಸಿದೆ. ನಿನ್ನಲ್ಲಿ ಭರವಸವಿಟ್ಟಿದ್ದ
ಅವರಿಗೆ ನಿರಾಶೆಯಾಗಲಿಲ್ಲ.
6 ಹೀಗಿರಲು, ನಾನು ಹುಳವೇ? ನಾನು ಮನುಷ್ಯ
ನಲ್ಲವೇ? ನನ್ನ ವಿಷಯದಲ್ಲಿ ಜನರು ನಾಚಿಕೆ
ಪಡುತ್ತಾರೆ. ಅವರು ನನ್ನನ್ನು ತಿರಸ್ಕರಿಸುತ್ತಾರೆ.
7 ನನ್ನನ್ನು ನೋಡಿದವರೆಲ್ಲರೂ ಗೇಲಿಮಾಡುವರು.
ಅವರು ಓರೆ ತುಟಿಮಾಡಿ ತಲೆಯಾಡಿಸುತ್ತಾ,
8 ‘‘ಯೆಹೋವನಿಗೆ ಮೊರೆಯಿಡು, ಆತನು ನಿನ್ನನ್ನು
ರಕ್ಷಿಸಬಹುದು. ಆತನು ನಿನ್ನನ್ನು ಬಹಳವಾಗಿ ಇಷ್ಟ

ಪಡುವುದಾದರೆ ನಿನ್ನನ್ನು ಖಂಡಿತವಾಗಿ ರಕ್ಷಿಸುವನು''
ಎನ್ನುತ್ತಾರೆ.
9 ನಾನಂತೂ ನಿನ್ನನ್ನೇ ಆಶ್ರಯಿಸಿಕೊಂಡಿದ್ದೇನೆ.
ಹುಟ್ಟಿದ ದಿನದಿಂದಲೂ ನನ್ನನ್ನು ಪರಿಪಾಲಿಸಿದವನು
ನೀನೇ. ನಾನಿನ್ನೂ ತಾಯಿಯ ಎದೆಯಲ್ಲಿದ್ದಾಗ ನನಗೆ
ಭರವಸೆ ನೀಡಿ ಸಂತೈಸಿದವನು ನೀನೇ.
10 ಹುಟ್ಟಿದ ದಿನದಿಂದಲೂ ನೀನೇ ನನ್ನ ದೇವರಾಗಿರುವೆ.
ತಾಯಿಯ ಗರ್ಭದಿಂದ ಬಂದಂದಿನಿಂದಲೂ ನನ್ನನ್ನು
ಪರಿಪಾಲಿಸಿದವನು ನೀನೇ.
11 ಹೀಗಿರಲು, ನನ್ನನ್ನು ತೊರೆಯಬೇಡ! ಆಪತ್ತು
ಸಮೀಪಿಸಿದೆ. ನನಗೆ ಸಹಾಯ ಮಾಡಲು ಯಾರೂ
ಇಲ್ಲ.
12 ಜನರು ನನ್ನನ್ನು ಸುತ್ತುಗಟ್ಟಿದ್ದಾರೆ; ಅವರು ಬಲಿಷ್ಠ
ವಾದ ಹೋರಿಗಳಂತಿದ್ದಾರೆ.
13 ಪ್ರಾಣಿಯೊಂದನ್ನು ಸೀಳಿಹಾಕುತ್ತಾ ಗರ್ಜಿಸುವ ಸಿಂಹ
ದಂತೆ ಅವರ ಬಾಯಿಗಳು ಅಗಲವಾಗಿ ತೆರೆದಿವೆ.
14 ನೆಲದ ಮೇಲೆ ಸುರಿದ ನೀರಿನಂತೆ ನನ್ನ ಬಲವು ಇಲ್ಲ
ವಾಗಿದೆ; ಮೂಳೆಗಳು ಸಡಿಲಗೊಂಡಿವೆ; ಹೃದಯವು
ಮೇಣದಂತೆ ಕರಗಿಹೋಗಿದೆ.
15 ನನ್ನ ಶಕ್ತಿಯು ಒಡೆದುಹೋದ ಮಡಿಕೆಯ ಒಣ
ತುಂಡಿನಂತಿದೆ. ನನ್ನ ನಾಲಿಗೆಯು ಬಾಯಿಯ
ಮೇಲ್ಭಾಗಕ್ಕೆ ಅಂಟಿಕೊಳ್ಳುತ್ತಿದೆ. ನೀನು ನನ್ನನ್ನು
ಮಣ್ಣಿಗೆ ಸೇರಿಸಿರುವೆ.
16 ದುಷ್ಟರು ನಾಯಿಗಳಂತೆ ನನ್ನನ್ನು ಸುತ್ತಿಕೊಂಡಿದ್ದಾರೆ.
ಅವರು ನನ್ನ ಕೈಗಳನ್ನೂ ಕಾಲುಗಳನ್ನೂ
ತಿವಿದಿದ್ದಾರೆ. *
17 ನನ್ನ ಮೂಳೆಗಳು ಎದ್ದುಕಾಣುತ್ತಿವೆ! ಜನರು ನನ್ನನ್ನು
ದಿಟ್ಟಿಸಿ ನೋಡುತ್ತಿದ್ದಾರೆ! ಅವರು ನನ್ನನ್ನೇ
ನೋಡುತ್ತಿದ್ದಾರೆ!
18 ಅವರು ನನ್ನ ಮೇಲ್ಹೊದಿಕೆಯನ್ನು ಪಾಲು ಮಾಡಿ
ಕೊಳ್ಳುವರು; ನನ್ನ ನಿಲುವಂಗಿಗಾಗಿ ಚೀಟು
ಹಾಕುವರು.
19 ಯೆಹೋವನೇ, ನನ್ನನ್ನು ತೊರೆಯಬೇಡ! ನೀನೇ
ನನ್ನ ಬಲ! ಬೇಗನೆ ನನಗೆ ಸಹಾಯಮಾಡು!
20 ಖಡ್ಗಕ್ಕೆ ಸಿಕ್ಕದಂತೆ ನನ್ನ ಜೀವವನ್ನು ರಕ್ಷಿಸು. ನನ್ನ
ಅಮೂಲ್ಯವಾದ ಜೀವವು ನಾಯಿಗಳ ಪಾಲಾಗದಂತೆ
ರಕ್ಷಿಸು.
21 ನನ್ನನ್ನು ಸಿಂಹದ ಬಾಯಿಂದ ಬಿಡಿಸು; ಹೋರಿಯ
ಕೊಂಬುಗಳಿಂದ ನನ್ನನ್ನು ಸಂರಕ್ಷಿಸು.
22 ನಿನ್ನ ಕುರಿತು ನನ್ನ ಸಹೋದರರಿಗೆ ಹೇಳುವೆನು;
ಮಹಾ ಸಭೆಯಲ್ಲಿ ನಿನ್ನನ್ನು ಸ್ತುತಿಸುವೆನು.
23 ಯೆಹೋವನನ್ನು ಆರಾಧಿಸುವವರೇ, ಆತನಿಗೆ
ಸ್ತೋತ್ರ ಮಾಡಿರಿ. ಇಸ್ರೇಲನ ಸಂತತಿಗಳವರೇ,
ಯೆಹೋವನಿಗೆ ಘನ ಮಾನವನ್ನು ಸಲ್ಲಿಸಿರಿ. ಇಸ್ರೇ
ಲರೇ, ಆತನಲ್ಲಿ ಭಯಭಕ್ತಿಯಿಂದಿರಿ.
24 ಯಾಕೆಂದರೆ ಇಕ್ಕಟ್ಟಿನಲ್ಲಿರುವ ಬಡವರಿಗೆ ಆತನು
ಸಹಾಯ ಮಾಡುತ್ತಾನೆ; ಅವರ ವಿಷಯದಲ್ಲಿ ಆತನು
ನಾಚಿಕೊಳ್ಳುವುದಿಲ್ಲ; ಆತನು ಅವರನ್ನು ದ್ವೇಷಿಸುವು
ದಿಲ್ಲ. ಅವರು ಆತನನ್ನು ಕೂಗಿಕೊಳ್ಳುವಾಗ ಆತನು
ಅವರಿಗೆ ಮರೆಯಾಗುವುದಿಲ್ಲ.
25 ಯೆಹೋವನೇ, ನಿನ್ನ ಕಾರ್ಯಗಳಿಗಾಗಿ ಮಹಾಸಭೆ
ಯಲ್ಲಿ ನಿನ್ನನ್ನು ಕೊಂಡಾಡುವೆನು; ನನ್ನ ಯಜ್ಞಗಳನ್ನು
ನಿನ್ನ ಭಕ್ತರ ಮುಂದೆ ಸಲ್ಲಿಸುವೆನು.
26 ಬಡವರು ತಿಂದು ತೃಪ್ತರಾಗುವರು. ಯೆಹೋವನಿ
ಗಾಗಿ ಹುಡುಕುತ್ತಾ ಬಂದವರೇ, ಆತನಿಗೆ ಸ್ತೋತ್ರ
ಮಾಡಿರಿ! ನಿಮ್ಮ ಹೃದಯಗಳು ಯಾವಾಗಲೂ
ಸಂತೋಷವಾಗಿರಲಿ! *
27 ದೂರದೇಶಗಳಲ್ಲಿರುವ ಜನರೆಲ್ಲರೂ ಯೆಹೋವ
ನನ್ನು ಜ್ಞಾಪಿಸಿಕೊಂಡು ಆತನ ಬಳಿಗೆ ಹಿಂತಿರುಗಲಿ.
ವಿದೇಶಗಳಲ್ಲಿರುವ ಜನರೆಲ್ಲರೂ ಆತನನ್ನು
ಆರಾಧಿಸಲಿ.
28 ಯಾಕಂದರೆ ಯೆಹೋವನೇ ರಾಜನು! ಆತನು
ಜನಾಂಗಗಳನ್ನೆಲ್ಲಾ ಆಳುವನು.
29 ಬಲಿಷ್ಠರೂ ದೃಢಕಾಯರೂ ತಿಂದು ದೇವರ ಮುಂದೆ
ಅಡ್ಡ ಬೀಳುವರು. ಸಾಯುವವರೂ ಸತ್ತು ಹೋಗಿರು
ವವರೂ ಆತನ ಮುಂದೆ ಅಡ್ಡಬೀಳುವರು.
30 ಮುಂದಿನ ಕಾಲದಲ್ಲಿ ನಮ್ಮ ಸಂತತಿಗಳವರು
ಯೆಹೋವನ ಸೇವೆಮಾಡುವರು. ಆತನ ಕುರಿತಾಗಿ
ಯಾವಾಗಲೂ ಹೇಳುತ್ತಿರುವರು.
31 ಪ್ರತಿಯೊಂದು ತಲೆಮಾರಿನವರೂ ತಮ್ಮ ಮಕ್ಕಳಿಗೆ
ಆತನ ಒಳ್ಳೆಯ ಕಾರ್ಯಗಳ ಬಗ್ಗೆ ಹೇಳುವರು. *

## ಕೀರ್ತನೆ 23

*ರಚನೆಗಾರ: ದಾವೀದ*

1 ಯೆಹೋವನೇ ನನಗೆ ಕುರುಬನು. ನನಗೆ
ಕೊರತೆಯೇ ಇಲ್ಲ.
2 ಆತನು ನನ್ನನ್ನು ಹಸಿರುಗಾವಲುಗಳಲ್ಲಿ ತಂಗಿಸುವನು.
ಪ್ರಶಾಂತವಾದ ನೀರಿನ ತೊರೆಗಳ ಬಳಿಯಲ್ಲಿ ನನ್ನನ್ನು
ನಡೆಸುವನು.

**ಅವರು … ತಿವಿದಿದ್ದಾರೆ** ಪುರಾತನ ಕಾಲದ ಗ್ರೀಕ್ ಅನುವಾದದ ಪ್ರಕಾರ, ''ಅವರು ನನ್ನ ಕೈಗಳನ್ನು ಮತ್ತು ಕಾಲುಗಳನ್ನು ತಿವಿದಿದ್ದಾರೆ.'' ಹೀಬ್ರೂವಿನಲ್ಲಿ, ''ತಿವಿದಿದ್ದಾರೆ'' ಎಂಬ ಪದವೇ ''ಸಿಂಹದಂತೆ'' ಎಂಬರ್ಥವನ್ನು ಕೊಡುತ್ತದೆ.

**ಸಂತೋಷವಾಗಿರಲಿ** ಅಕ್ಷರಶಃ, ''ಜೀವಿಸಲಿ.''

**ವಚನಗಳು 30-31** ಈ ವಚನಗಳನ್ನು ಹೀಬ್ರೂ ಭಾಷೆಯಲ್ಲಿ ಅರ್ಥ ಮಾಡಿಕೊಳ್ಳಲು ಕಷ್ಟ

3 ಆತನು ತನ್ನ ಹೆಸರಿಗೆ ತಕ್ಕಂತೆ ನನ್ನ ಪ್ರಾಣಕ್ಕೆ ಚೈತನ್ಯ ನೀಡಿ ನೀತಿ ಮಾರ್ಗದಲ್ಲಿ ನನ್ನನ್ನು ನಡೆಸುವನು.
4 ನಾನು ಕಾರ್ಗತ್ತಲಿನ ಕಣಿವೆಯಲ್ಲಿ ನಡೆಯುವಾಗಲೂ ನೀನು ನನ್ನೊಂದಿಗಿರುವುದರಿಂದ ಭಯಪಡುವುದಿಲ್ಲ. ನಿನ್ನ ದೊಣ್ಣೆಯೂ ಊರುಗೋಲೂ ನನ್ನನ್ನು ಸಂತೈಸುತ್ತವೆ.
5 ವೈರಿಗಳ ಎದುರಿನಲ್ಲಿ ನೀನು ನನಗೆ ಔತಣವನ್ನು ಸಿದ್ಧಪಡಿಸಿರುವೆ; ನನ್ನ ತಲೆಗೆ ಎಣ್ಣೆಯನ್ನು ಹಚ್ಚಿರುವೆ. ನನ್ನ ಪಾತ್ರೆಯು ತುಂಬಿ ಹೊರಸೂಸುತ್ತಿದೆ.
6 ನಿಶ್ಚಯವಾಗಿ ನನ್ನ ಜೀವಮಾನದಲ್ಲೆಲ್ಲಾ ಶುಭವೂ ಕೃಪೆಯೂ ನನ್ನೊಂದಿಗಿರುತ್ತವೆ. ನನ್ನ ಜೀವಮಾನವೆಲ್ಲಾ ಯೆಹೋವನ ಆಲಯದಲ್ಲೇ ವಾಸಿಸುವೆನು.

## ಕೀರ್ತನೆ 24

*ರಚನೆಗಾರ: ದಾವೀದ*

1 ಭೂಮಿಯೂ ಅದರಲ್ಲಿರುವ ಸಮಸ್ತವೂ ಯೆಹೋವನವೇ. ಲೋಕವೂ ಅದರ ನಿವಾಸಿಗಳೂ ಆತನವೇ.
2 ಅದರ ಅಸ್ತಿವಾರವನ್ನು ಸಾಗರದ ಮೇಲೆ ಹಾಕಿದವನು ಆತನೇ. ಅದನ್ನು ಜಲರಾಶಿಗಳ ಮೇಲೆ ಕಟ್ಟಿದವನೂ ಆತನೇ.
3 ಯೆಹೋವನ ಪರ್ವತವನ್ನು ಹತ್ತುವವನು ಎಂಥವನಾಗಿರಬೇಕು? ಆತನ ಪವಿತ್ರ ಆಲಯದಲ್ಲಿ ನಿಂತುಕೊಳ್ಳುವಂಥವರು ಎಂಥವರಾಗಿರಬೇಕು?
4 ಅವರು ದುಷ್ಟಕಾರ್ಯಗಳನ್ನು ಮಾಡಿಲ್ಲದವರೂ ಶುದ್ಧ ಹೃದಯವುಳ್ಳವರೂ ನನ್ನ ಹೆಸರಿನಲ್ಲಿ* ಮೋಸ ಪ್ರಮಾಣ ಮಾಡದವರೂ ವಿಗ್ರಹಗಳನ್ನು ಆರಾಧಿಸದವರೂ ಆಗಿರಬೇಕು.
5 ಅವರನ್ನು ಯೆಹೋವನು ಆಶೀರ್ವದಿಸಿ ಕಾಪಾಡುವನು; ದೇವರು ಅವರನ್ನು ನಿರಪರಾಧಿಗಳೆಂದು ಪ್ರಕಟಿಸುವನು.
6 ಆತನನ್ನು ಅನುಸರಿಸುವವರು ಇಂಥವರೇ. ಸಹಾಯಕ್ಕಾಗಿ ಯಾಕೋಬನ ದೇವರ ಬಳಿಗೆ ಹೋಗುವವರು ಇಂಥವರೇ.
7 ಹೆಬ್ಬಾಗಿಲುಗಳೇ, ಉನ್ನತವಾಗಿರಿ! ಪುರಾತನ ದ್ವಾರಗಳೇ, ತೆರೆದುಕೊಂಡಿರಿ. ಮಹಿಮಾಸ್ವರೂಪನಾದ ರಾಜನು ಆಗಮಿಸುತ್ತಿದ್ದಾನೆ.
8 ಮಹಿಮಾಸ್ವರೂಪನಾದ ಈ ರಾಜನು ಯಾರು? ಬಲಿಷ್ಠನೂ ಮಹಾಪರಾಕ್ರಮಿಯೂ ಆಗಿರುವ ಯೆಹೋವನೇ ಆತನು.
9 ಹೆಬ್ಬಾಗಿಲುಗಳೇ, ಉನ್ನತವಾಗಿರಿ! ಪುರಾತನ ದ್ವಾರಗಳೇ, ತೆರೆದುಕೊಂಡಿರಿ. ಮಹಿಮಾ ಸ್ವರೂಪನಾದ ರಾಜನು ಆಗಮಿಸುತ್ತಿದ್ದಾನೆ.
10 ಮಹಿಮಾ ಸ್ವರೂಪನಾದ ಈ ರಾಜನು ಯಾರು? ಸರ್ವಶಕ್ತನಾದ ಯೆಹೋವನೇ ಆ ರಾಜನು. ಮಹಿಮಾ ಸ್ವರೂಪನಾದ ರಾಜನು ಆತನೇ.

## ಕೀರ್ತನೆ 25

*ರಚನೆಗಾರ: ದಾವೀದ*

1 ಯೆಹೋವನೇ, ನಿನ್ನಲ್ಲೇ ಮನಸ್ಸಿಟ್ಟಿದ್ದೇನೆ.
2 ನನ್ನ ದೇವರೇ, ನಿನ್ನಲ್ಲಿ ಭರವಿಸವಿಟ್ಟಿದ್ದೇನೆ. ನನ್ನನ್ನು ನಿರಾಶೆಗೊಳಿಸಬೇಡ. ವೈರಿಗಳು ನನ್ನನ್ನು ನೋಡಿ ಗೇಲಿ ಮಾಡದಂತಾಗಲಿ!
3 ನಿನ್ನಲ್ಲಿ ಭರವಸವಿಟ್ಟಿರುವವರು ನಿರಾಶರಾಗುವುದಿಲ್ಲ ದ್ರೋಹಿಗಳಾದರೊ ನಿರಾಶರಾಗುವರು. ಅವರಿಗೆ ಏನೂ ದೊರೆಯುವುದಿಲ್ಲ.
4 ಯೆಹೋವನೇ ನಿನ್ನ ಮಾರ್ಗಗಳನ್ನು ನನಗೆ ಕಲಿಸು. ನಿನ್ನ ಮಾರ್ಗಗಳನ್ನು ನನಗೆ ಉಪದೇಶಿಸು.
5 ನನಗೆ ಮಾರ್ಗದರ್ಶನ ನೀಡು; ನಿನ್ನ ಸತ್ಯಗಳನ್ನು ನನಗೆ ಉಪದೇಶಿಸು. ನೀನೇ ನನ್ನ ದೇವರು. ನೀನೇ ನನ್ನ ರಕ್ಷಕ. ಪ್ರತಿದಿನವೂ ನಿನ್ನಲ್ಲಿ ಭರವಸವಿಟ್ಟಿರುವೆ.
6 ಯೆಹೋವನೇ, ನನಗೆ ಕರುಣೆ ತೋರಬೇಕೆಂಬುದನ್ನು ಜ್ಞಾಪಿಸಿಕೊ. ನಿನ್ನ ಶಾಶ್ವತವಾದ ಪ್ರೀತಿಯನ್ನು ನನಗೆ ತೋರಿಸು.
7 ನಾನು ಯೌವನಸ್ಥನಾಗಿದ್ದಾಗ ಮಾಡಿದ ಪಾಪಗಳನ್ನಾಗಲಿ ಕೆಟ್ಟಕಾರ್ಯಗಳನ್ನಾಗಲಿ ಜ್ಞಾಪಿಸಿಕೊಳ್ಳಬೇಡ. ಯೆಹೋವನೇ, ನಿನ್ನ ಒಳ್ಳೆಯ ಹೆಸರಿನ ನಿಮಿತ್ತ ನನ್ನನ್ನು ಪ್ರೀತಿಯಿಂದ ಜ್ಞಾಪಿಸಿಕೊ.
8 ಯೆಹೋವನು ನಿಜವಾಗಿಯೂ ಒಳ್ಳೆಯವನು. ಆತನು ಪಾಪಿಗಳಿಗೆ ಜೀವಮಾರ್ಗವನ್ನು ಬೋಧಿಸುವನು.
9 ಆತನು ದೀನರಿಗೆ ತನ್ನ ಮಾರ್ಗಗಳನ್ನು ಉಪದೇಶಿಸುವನು. ಆತನು ಅವರನ್ನು ತನ್ನ ನ್ಯಾಯಾನುಸಾರವಾಗಿ ನಡೆಸುವನು.
10 ಯೆಹೋವನ ಒಡಂಬಡಿಕೆಯನ್ನೂ ವಾಗ್ದಾನಗಳನ್ನೂ* ಅನುಸರಿಸುವ ಜನರಿಗೆ ಆತನ ಮಾರ್ಗಗಳೆಲ್ಲ ಕರಣೆಯುಳ್ಳವೂ ಸತ್ಯವೂ ಆಗಿವೆ.
11 ಯೆಹೋವನೇ, ನಾನು ಅನೇಕ ಪಾಪಗಳನ್ನು ಮಾಡಿದ್ದೇನೆ. ಆದರೆ ನೀನು ನಿನ್ನ ಹೆಸರಿನ ನಿಮಿತ್ತ ಅವುಗಳನ್ನೆಲ್ಲಾ ಕ್ಷಮಿಸಿ ಬಿಟ್ಟು.
12 ಯೆಹೋವನು ತನ್ನಲ್ಲಿ ಭಯಭಕ್ತಿಯುಳ್ಳವರಿಗೆ ಅತ್ಯುತ್ತಮವಾದ ಜೀವಮಾರ್ಗವನ್ನು ತೋರಿಸುವನು.

---

**ನನ್ನ ಹೆಸರು** ಅಕ್ಷರಶಃ, ನನ್ನ ಪ್ರಾಣ.

**ಒಡಂಬಡಿಕೆ ಮತ್ತು ವಾಗ್ದಾನಗಳು** ಬಹುಶಃ ಇದು ಮೋಶೆಯ ಧರ್ಮಶಾಸ್ತ್ರ ಅಂದರೆ ದೇವರು ಇಸ್ರೇಲ್ ಜನರೊಂದಿಗೆ ಮಾಡಿಕೊಂಡ ಒಡಂಬಡಿಕೆ.

13 ಅವನು ಸುಖದಿಂದಿರುವನು. ಆತನು ವಾಗ್ದಾನ ಮಾಡಿದ ದೇಶವನ್ನು ಅವನ ಮಕ್ಕಳು ಅನುಭವಿಸುವರು.
14 ಯೆಹೋವನು ತನಗೆ ವಿಧೇಯರಾಗಿರುವವರಿಗೆ ಆಪ್ತ ಮಿತ್ರ ನಂತಿರುವನು. ಆತನು ಅವರಿಗೆ ತನ್ನ ಒಡಂಬಡಿಕೆಯನ್ನು* ಉಪದೇಶಿಸುವನು.
15 ನನ್ನ ಕಣ್ಣುಗಳು ಸಹಾಯಕ್ಕಾಗಿ ಯೆಹೋವನನ್ನೇ ದೃಷ್ಟಿಸುತ್ತಿವೆ. ಆತನು ನನ್ನನ್ನು ತೊಂದರೆಗಳಿಂದ ಖಂಡಿತವಾಗಿ ಬಿಡಿಸುವನು.*
16 ಯೆಹೋವನೇ, ನಾನು ಬಾಧೆಪಡುವವನೂ ಒಬ್ಬಂಟಿಗನೂ ಆಗಿದ್ದೇನೆ. ನನಗೆ ಅಭಿಮುಖನಾಗಿ ಕರುಣೆ ತೋರು.
17 ಇಕ್ಕಟ್ಟುಗಳಿಂದ ನನ್ನನ್ನು ಬಿಡಿಸು. ನನ್ನ ಸಮಸ್ಯೆಗಳನ್ನು ಪರಿಹರಿಸು.
18 ಯೆಹೋವನೇ, ನನ್ನ ಸಂಕಟವನ್ನೂ ತೊಂದರೆಗಳನ್ನೂ ನೋಡು. ನನ್ನ ಪಾಪಗಳನ್ನೆಲ್ಲ ಕ್ಷಮಿಸು.
19 ನನ್ನ ವೈರಿಗಳನ್ನೆಲ್ಲ ದೃಷ್ಟಿಸಿನೋಡು. ಅವರು ನನ್ನನ್ನು ದ್ವೇಷಿಸುತ್ತಾ ಕೇಡುಮಾಡಬೇಕೆಂದಿದ್ದಾರೆ.
20 ದೇವರೇ, ನನ್ನನ್ನು ಕಾಪಾಡು, ನನ್ನನ್ನು ರಕ್ಷಿಸು. ನಾನು ನಿನ್ನಲ್ಲಿ ಭರವಸವಿಟ್ಟಿರುವುದರಿಂದ ನನ್ನನ್ನು ನಿರಾಶೆಗೊಳಿಸಬೇಡ.
21 ದೇವರೇ, ನೀನು ನಿಜವಾಗಿಯೂ ಒಳ್ಳೆಯವನು. ನಾನು ನಿನ್ನಲ್ಲಿ ಭರವಸವಿಟ್ಟಿರುವೆ, ಆದ್ದರಿಂದ ನನ್ನನ್ನು ಕಾಪಾಡು.
22 ದೇವರೇ, ಇಸ್ರೇಲರನ್ನು ವೈರಿಗಳಿಂದ ತಪ್ಪಿಸಿ ಕಾಪಾಡು.

## ಕೀರ್ತನೆ 26

*ರಚನೆಗಾರ: ದಾವೀದ*

1 ಯೆಹೋವನೇ, ನನಗೆ ನ್ಯಾಯವನ್ನು ನಿರ್ಣಯಿಸು. ನನ್ನ ಜೀವಿತ ಶುದ್ಧವಾಗಿತ್ತೆಂದು ನಿರೂಪಿಸು. ನಾನು ಯೆಹೋವನಲ್ಲಿಯೇ ಭರವಸವಿಟ್ಟಿದ್ದೇನು.
2 ಯೆಹೋವನೇ, ನನ್ನನ್ನು ಪರೀಕ್ಷಿಸಿ ತಿಳಿದುಕೊ. ನನ್ನ ಹೃದಯವನ್ನೂ ಮನಸ್ಸನ್ನೂ ಸೂಕ್ಷ್ಮವಾಗಿ ಪರಿಶೀಲಿಸು.
3 ನಿನ್ನ ಶಾಶ್ವತ ಪ್ರೀತಿಯನ್ನು ದೃಷ್ಟಿಯಲ್ಲಿಟ್ಟುಕೊಂಡಿದ್ದೇನೆ. ನಿನ್ನ ಸತ್ಯಕ್ಕನುಸಾರವಾಗಿ ಜೀವಿಸುವೆನು.
4 ಅಯೋಗ್ಯರಾದ ಅವರಲ್ಲಿ ನಾನೂ ಒಬ್ಬನಲ್ಲ.
5 ಆ ದುಷ್ಟತಂಡಗಳನ್ನು ನಾನು ದ್ವೇಷಿಸುತ್ತೇನೆ. ಮೋಸಗಾರರ ಆ ತಂಡಗಳಿಗೆ ನಾನು ಸೇರುವುದಿಲ್ಲ.
6 ಯೆಹೋವನೇ, ನಾನು ನಿನ್ನ ಯಜ್ಞವೇದಿಕೆಯ* ಸುತ್ತಲೂ ನಡೆಯಲು ನನ್ನ ಕೈಗಳನ್ನು ತೊಳೆದುಕೊಳ್ಳುತ್ತೇನೆ.
7 ನಾನು ನಿನಗೆ ಸ್ತುತಿಗೀತೆಗಳನ್ನು ಹಾಡುವೆನು. ನಿನ್ನ ಅದ್ಭುತಕಾರ್ಯಗಳ ಕುರಿತು ಹಾಡುವೆನು.
8 ಯೆಹೋವನೇ, ನಿನ್ನ ಆಲಯವೂ* ನಿನ್ನ ಮಹಿಮೆ ಗುಡಾರವೂ ನನಗೆ ಎಷ್ಟೋ ಪ್ರಿಯವಾಗಿದೆ.
9 ಆ ಪಾಪಿಗಳ ಗುಂಪಿನಲ್ಲಿ ನನ್ನನ್ನು ಸೇರಿಸಬೇಡ. ಆ ಕೊಲೆಗಾರರೊಡನೆ ನನ್ನನ್ನೂ ಕೊಲ್ಲಬೇಡ.
10 ಅವರು ಜನರನ್ನು ವಂಚಿಸುವರು; ಕೆಟ್ಟಕಾರ್ಯಗಳನ್ನು ಮಾಡಲು ಲಂಚ ತೆಗೆದುಕೊಳ್ಳುವರು.
11 ನಾನಾದರೋ ನಿರಪರಾಧಿ. ನನಗೆ ಕರುಣೆತೋರಿ ನನ್ನನ್ನು ರಕ್ಷಿಸು.
12 ನಾನು ಎಲ್ಲಾ ಅಪಾಯಗಳಿಂದ ಪಾರಾಗಿದ್ದೇನೆ. ಯೆಹೋವನೇ, ನಿನ್ನ ಭಕ್ತರ ಸಭೆಯಲ್ಲಿ ನಿನ್ನನ್ನು ಕೊಂಡಾಡುವೆನು.

## ಕೀರ್ತನೆ 27

*ರಚನೆಗಾರ: ದಾವೀದ*

1 ಯೆಹೋವನೇ, ನೀನೇ ನನಗೆ ಬೆಳಕೂ ರಕ್ಷಕನೂ ಆಗಿರುವೆ. ನಾನು ಯಾರಿಗೂ ಭಯಪಡಬೇಕಿಲ್ಲ! ಯೆಹೋವನೇ, ನನ್ನ ಪ್ರಾಣಕ್ಕೆ ಆಶ್ರಯಸ್ಥಾನವೂ ನೀನೇ. ಆದ್ದರಿಂದ ನಾನು ಯಾರಿಗೂ ಹೆದರುವುದಿಲ್ಲ!
2 ದುಷ್ಟರು ನನ್ನನ್ನು ಕೊಲ್ಲಲು ಆಕ್ರಮಣಮಾಡುವಾಗ ತಾವೇ ಮುಗ್ಗರಿಸಿ ಬೀಳುವರು.
3 ಮಹಾಸೈನ್ಯವೇ ನನಗೆ ಮುತ್ತಿಗೆ ಹಾಕಿದರೂ ನಾನು ಭಯಪಡುವುದಿಲ್ಲ. ಸೈನಿಕರು ನನ್ನ ಮೇಲೆ ಆಕ್ರಮಣ ಮಾಡಿದರೂ ನಾನು ಹೆದರುವುದಿಲ್ಲ. ಯಾಕೆಂದರೆ ನಾನು ಯೆಹೋವನಲ್ಲಿ ಭರವಸವಿಟ್ಟಿದ್ದೇನೆ.

---

**ಒಡಂಬಡಿಕೆ** ಅಕ್ಷರಶಃ, ''ಪುರಾವೆ'' ದೇವರು ಮತ್ತು ಇಸ್ರೇಲ್‌ರ ನಡುವೆ ಆದ ಒಪ್ಪಂದಕ್ಕೆ ಚಪ್ಪಟೆ ಕಲ್ಲುಗಳ ಮೇಲೆ ಬರೆಯಲ್ಪಟ್ಟ ಹತ್ತು ಆಜ್ಞೆಗಳೇ ಪುರಾವೆಯಾಗಿದ್ದವು.

**ಆತನು ... ಬಿಡಿಸುವನು** ಅಕ್ಷರಶಃ, ''ಆತನು ನನ್ನ ಕಾಲುಗಳನ್ನು ಬಲೆಯಿಂದ ಬಿಡಿಸುವನು.''

**ಯಜ್ಞವೇದಿಕೆ** ಈ ಕೀರ್ತನೆಗಾರನು ಯಾಜಕನೂ ಲೇವಿಯನೂ ಆಗಿದ್ದಿರಬೇಕೆಂದು ಇದು ಸೂಚಿಸುತ್ತದೆ. ಜನರನ್ನು ಸಭೆ ಸೇರಿಸುವುದರಲ್ಲಿ ಇವನು ಕಾರ್ಯನಿರತನಾಗಿದ್ದಿರಬಹುದು (ವಚನ 12.) ಯಾಜಕರು ಮತ್ತು ಲೇವಿಯರು ಮಾತ್ರ ಸೇವೆಮಾಡಬಹುದಾದ ದೇವಾಲಯದ ಸ್ಥಳದಲ್ಲಿ ಇವನು ಸೇವೆ ಮಾಡುತ್ತಿದ್ದಿರಬಹುದು. ವಚನದ ಈ ಭಾಗವನ್ನು ''ನಾನು ಯಜ್ಞವೇದಿಕೆಯ ಸುತ್ತಲೂ ಜನರನ್ನು ಸೇರಿಸಲು ಸಾಧ್ಯವಾಗುವಂತೆ'' ಎಂದು ಸಹ ಅನುವಾದಿಸಬಹುದು. ಈ ರೀತಿ ಅನುವಾದ ಮಾಡಿದರೆ, ಈ ಕೀರ್ತನೆಗಾರನು ತನ್ನನ್ನು ಶುದ್ಧೀಕರಿಸಿಕೊಳ್ಳುತ್ತಿದ್ದದ್ದು ಕೇವಲ ಆರಾಧಕನಾಗಿಯೇ ಹೊರತು ಯಾಜಕನಾಗಲ್ಲ ಎಂಬ ಅರ್ಥವನ್ನು ಕೊಡುತ್ತದೆ.

**ಆಲಯ** ಯೆಹೂದ್ಯರ ಆರಾಧನೆಗಾಗಿ ಜೆರುಸಲೇಮಿನಲ್ಲಿದ್ದ ವಿಶೇಷ ಕಟ್ಟಡ.

4 ನನ್ನ ಜೀವಮಾನವೆಲ್ಲಾ ಯೆಹೋವನ ಆಲಯದಲ್ಲಿ
ವಾಸಿಸುತ್ತಾ ಆತನ ಸೌಂದರ್ಯವನ್ನು ವೀಕ್ಷಿಸುತ್ತಾ
ಆತನ ಮಾರ್ಗದರ್ಶನವನು ಎದುರುನೋಡುತ್ತಾ
ಇರ ಬೇಕೆಂಬ ಒಂದೇ ಒಂದು ಕೋರಿಕೆಯನ್ನು
ಯೆಹೋವನಲ್ಲಿ ಕೇಳಿಕೊಂಡು ಅದನ್ನೇ ಎದುರು
ನೋಡುತ್ತಿದ್ದೇನೆ.
5 ನಾನು ಅಪಾಯದಲ್ಲಿರುವಾಗ ಯೆಹೋವನು
ನನ್ನನ್ನು ಸಂರಕ್ಷಿಸುತ್ತಾನೆ; ತನ್ನ ಗುಡಾರದಲ್ಲಿ ನನ್ನನ್ನು
ಅಡಗಿಸುತ್ತಾನೆ. ಸುರಕ್ಷಿತವಾದ ಸ್ಥಳಕ್ಕೆ ನನ್ನನ್ನು
ಕೊಂಡೊಯ್ಯುವನು.
6 ವೈರಿಗಳು ನನಗೆ ಮುತ್ತಿಗೆ ಹಾಕಿದ್ದರೂ ಅವರನ್ನು
ಸೋಲಿಸಲು ಯೆಹೋವನು ನನಗೆ ಸಹಾಯ ಮಾಡು
ವನು! ಆಗ ನಾನು ಆತನ ಗುಡಾರದಲ್ಲಿ ಉತ್ಸಾಹ ಧ್ವನಿ
ಯೊಡನೆ ಯಜ್ಞಗಳನ್ನು ಅರ್ಪಿಸುವೆನು. ವಾದ್ಯಗಳನ್ನು
ನುಡಿಸುತ್ತಾ ಆತನನ್ನು ಕೊಂಡಾಡುವೆನು.
7 ಯೆಹೋವನೇ, ನನ್ನ ಸ್ವರವನ್ನು ಕೇಳಿ ನನಗೆ
ಉತ್ತರಿಸು. ನನ್ನನ್ನು ಕರುಣಿಸು.
8 ಯೆಹೋವನೇ, ನಾನು ನಿನ್ನೊಂದಿಗೆ ಹೃದಯ
ಪೂರ್ವಕವಾಗಿ ಮಾತನಾಡಬೇಕೆಂದಿದ್ದೇನೆ.
ದೇವರೇ, ನಾನು ನಿನ್ನ ಸನ್ನಿಧಿಗೆ ಬರುತ್ತೇನೆ.
9 ಯೆಹೋವನೇ, ನನಗೆ ವಿಮುಖನಾಗಬೇಡ; ನಿನ್ನ
ಸೇವಕನನ್ನು ಕೋಪದಿಂದ ತಳ್ಳಿಬಿಡಬೇಡ. ನನ್ನ
ದೇವರೇ, ನನ್ನ ರಕ್ಷಕನು ನೀನೇ. ನನ್ನನ್ನು ಕೈಬಿಡ
ಬೇಡ! ತೊರೆದು ಬಿಡಬೇಡ!
10 ತಂದೆತಾಯಿಗಳು ನನ್ನನ್ನು ತೊರೆದುಬಿಟ್ಟರೇನು;
ಯೆಹೋವನು ನನ್ನನ್ನು ಸೇರಿಸಿಕೊಳ್ಳುವನು.
11 ಯೆಹೋವನೇ, ನನಗೆ ವೈರಿಗಳಿರುವುದರಿಂದ ನಿನ್ನ
ಮಾರ್ಗವನ್ನು ನನಗೆ ಉಪದೇಶಿಸಿ ನಿನ್ನ ಚಿತ್ತಾನುಸಾರ
ವಾಗಿ ನನ್ನನ್ನು ನಡೆಸು.
12 ವೈರಿಗಳು ನನ್ನ ಮೇಲೆ ಆಕ್ರಮಣ ಮಾಡಿದ್ದಾರೆ. ನನಗೆ
ಕೇಡಾಗಲೆಂದು ಸುಳ್ಳುಗಳನ್ನು ಹೇಳಿದ್ದಾರೆ.
13 ಯೆಹೋವನ ಒಳ್ಳೆಯತನವನ್ನು ಸಾಯುವುದಕ್ಕಿಂತ
ಮುಂಚೆ* ನೋಡುತ್ತೇನೆ ಎಂಬ ದೃಢನಂಬಿಕೆ
ನನ್ನಲ್ಲಿದೆ.
14 ಯೆಹೋವನ ಸಹಾಯಕ್ಕಾಗಿ ಕಾದುಕೊಂಡಿರಿ! ಬಲ
ವಾಗಿಯೂ ಧೈರ್ಯವಾಗಿಯೂ ಇರಿ! ಯೆಹೋವನ
ಸಹಾಯಕ್ಕಾಗಿ ಕಾದುಕೊಂಡಿರಿ!

## ಕೀರ್ತನೆ 28

*ರಚನೆಗಾರ: ದಾವೀದ*

1 ಯೆಹೋವನೇ, ನೀನೇ ನನ್ನ ಬಂಡೆ. ಸಹಾಯಕ್ಕಾಗಿ
ನಾನು ನಿನ್ನನ್ನು ಕೂಗಿಕೊಳ್ಳುತ್ತಿದ್ದೇನೆ. ನನ್ನ ಪ್ರಾರ್ಥನೆ
ಗಳಿಗೆ ಕಿವಿಗಳನ್ನು ಮುಚ್ಚಿಕೊಳ್ಳಬೇಡ. ಇಲ್ಲವಾದರೆ
ಸತ್ತು ಸಮಾಧಿಯಲ್ಲಿರುವವರಂತೆ ಜನರು ನನ್ನನ್ನು
ಪರಿಗಣಿಸುವರು.
2 ಮಹಾಪವಿತ್ರ ಸ್ಥಳದ* ಕಡೆಗೆ ಕೈಯೆತ್ತಿ ಪ್ರಾರ್ಥಿಸು
ವೆನು. ನಾನು ನಿನ್ನನ್ನು ಕೂಗಿಕೊಳ್ಳುವಾಗ ನನಗೆ ಕಿವಿ
ಗೊಟ್ಟು ಕರುಣಿಸು.
3 ನನ್ನನ್ನು ಆ ಕೆಟ್ಟವರೊಂದಿಗೆ ಲೆಕ್ಕಿಸಬೇಡ. ಅವರು
ತಮ್ಮ ನೆರೆಯವರಿಗೆ ''ಸಮಾಧಾನವಾಗಲಿ'' ಎಂದು
ಹರಸಿದರೂ ಅವರ ವಿರೋಧವಾಗಿ ಸಂಚುಗಳನ್ನು
ಮಾಡುತ್ತಾರೆ.*
4 ಅವರು ನೆರೆಯವರಿಗೆ ಕೇಡುಗಳನ್ನು ಮಾಡುವರು.
ಆದ್ದರಿಂದ ಅವರಿಗೇ ಕೇಡಾಗುವಂತೆ ಮಾಡು.
ಅವರಿಗೆ ತಕ್ಕ ದಂಡನೆಯನ್ನು ಕೊಡು.
5 ಯೆಹೋವನ ಕಾರ್ಯಗಳನ್ನೂ ಆತನ ಕೈ ಕೆಲಸ
ಗಳನ್ನೂ ಕೆಡುಕರು ವಿವೇಚಿಸಿ ತಿಳಿದುಕೊಳ್ಳವುದಿಲ್ಲ.
ಆದ್ದರಿಂದ ಆತನು ಅವರನ್ನು ದಂಡಿಸಿ ನಿತ್ಯನಾಶ
ಮಾಡುವನು.
6 ಯೆಹೋವನಿಗೆ ಸ್ತೋತ್ರವಾಗಲಿ! ಆತನು ನನ್ನ
ಪ್ರಾರ್ಥನೆಯನ್ನು ಕೇಳಿದ್ದಾನೆ.
7 ಯೆಹೋವನೇ ನನಗೆ ಬಲವೂ ಗುರಾಣಿಯೂ ಆಗಿ
ದ್ದಾನೆ. ನಾನು ಆತನಲ್ಲಿ ಭರವಸವಿಟ್ಟಿರುವುದರಿಂದ
ಆತನು ನನಗೆ ಸಹಾಯಮಾಡಿದನು. ಆದಕಾರಣ ನನ್ನ
ಹೃದಯವು ಹರ್ಷಿಸುವುದು; ನಾನು ಸ್ತುತಿಗೀತೆಗಳನ್ನು
ಹಾಡುತ್ತಾ ಆತನನ್ನು ಕೊಂಡಾಡುವೆನು.
8 ಯೆಹೋವನು ತನ್ನ ಜನರಿಗೆ ಬಲವೂ ತಾನು ಆರಿಸಿ
ಕೊಂಡ ಅರಸನಿಗೆ ಆಶ್ರಯದುರ್ಗವೂ ಆಗಿದ್ದಾನೆ.
9 ದೇವರೇ, ನಿನ್ನ ಜನರನ್ನು ರಕ್ಷಿಸು, ನಿನ್ನ ಸ್ವಕೀಯ ಪ್ರಜೆ
ಯನ್ನು ಆಶೀರ್ವದಿಸು! ಅವರಿಗೆ ಕುರುಬನಾಗಿದ್ದು
ಸದಾಕಾಲ ಅವರನ್ನು ಪರಿಪಾಲಿಸು.

## ಕೀರ್ತನೆ 29

*ರಚನೆಗಾರ: ದಾವೀದ*

1 ದೇವಪುತ್ರರೇ,* ಯೆಹೋವನನ್ನು ಸ್ತುತಿಸಿರಿ! ಆತನ
ಮಹಿಮೆಯನ್ನೂ ಶಕ್ತಿಯನ್ನೂ ಸ್ತುತಿಸಿರಿ.

---

**ನಾನು ಸಾಯುವುದಕ್ಕಿಂತ ಮುಂಚೆ** ಅಕ್ಷರಶಃ ''ಜೀವಿಸುವವರ ನಾಡಿನಲ್ಲಿ.''

**ಮಹಾಪವಿತ್ರ ಸ್ಥಳ** ''ದೇವಾಲಯದ ಅಥವಾ ಪರಿಶುದ್ಧ ಗುಡಾರದ ಅತ್ಯಂತ ಮುಖ್ಯವಾದ ಭಾಗ. ಈ ಕೋಣೆಯಲ್ಲಿ ಒಡಂಬಡಿಕೆಯ ಪೆಟ್ಟಿಗೆಯಿತ್ತು ಮತ್ತು ಕೆರೂಬಿ ದೂತರಿದ್ದರು. ದೇವರು ಇಸ್ರೇಲರ ರಾಜನಾಗಿ ಕುಳಿತುಕೊಂಡ ಸಿಂಹಾಸನದಂತೆ ಇವುಗಳಿದ್ದವು.

**ಅವರು ... ಮಾಡುತ್ತಾರೆ** ಇದು ಶ್ಲೇಷ ಮಾತುಗಳ ಸರಣಿ. ಹೀಬ್ರೂ ಭಾಷೆಯಲ್ಲಿ ''ನೆರೆಯವನು'' ಎಂಬ ಪದವು ''ದುಷ್ಟನು'' ಎಂಬ ಪದದಂತೆ ಕಂಡುಬರುತ್ತದೆ. ''ಸಮಾಧಾನ'' ಎಂಬಪದಕ್ಕೆ ಹೀಬ್ರೂ ಭಾಷೆಯಲ್ಲಿ ''ಶಾಲೋಮ್'' ಎನ್ನುತ್ತಾರೆ. ಈ ಪದವನ್ನು ಒಬ್ಬರನ್ನೊಬ್ಬರು ಅಭಿನಂದಿಸುವಾಗ ಉಪಯೋಗಿಸುತ್ತಾರೆ.

**ದೇವಪುತ್ರರು** ''ಯಾಜಕರು'' ಅಥವಾ ''ದೇವದೂತರು'' ಎಂಬರ್ಥವನ್ನು ಇದು ಕೊಡುತ್ತದೆ.

2 ಯೆಹೋವನನ್ನು ಸ್ತುತಿಸುತ್ತಾ ಆತನ ಹೆಸರನ್ನು ಘನ
ಪಡಿಸಿರಿ. ಪರಿಶುದ್ಧವಸ್ತ್ರಗಳನ್ನು ಧರಿಸಿಕೊಂಡು
ಆತನನ್ನು ಆರಾಧಿಸಿರಿ.*
3 ಯೆಹೋವನ ಸ್ವರವು ಸಮುದ್ರದ ಮೇಲೆ ಕೇಳಿ
ಬರುವುದು. ಮಹಾಸಾಗರದ ಮೇಲಿನ ಗುಡುಗಿನಂತೆ
ಮಹಿಮಾ ಸ್ವರೂಪನಾದ ದೇವರ ಸ್ವರವು ಕೇಳಿ
ಬರುವುದು.
4 ಯೆಹೋವನ ಸ್ವರವು ಆತನ ಶಕ್ತಿಯನ್ನೂ ಮಹಿಮೆ
ಯನ್ನೂ ತೋರ್ಪಡಿಸುವುದು.
5 ಯೆಹೋವನ ಸ್ವರವು ದೇವದಾರು ವೃಕ್ಷಗಳನ್ನು
ತುಂಡು ತುಂಡು ಮಾಡುತ್ತದೆ. ಯೆಹೋವನು ಲೆಬ
ನೋನಿನ ದೇವದಾರು ವೃಕ್ಷಗಳನ್ನೂ ಮುರಿದು
ಹಾಕುವನು.
6 ಯೆಹೋವನು ಲೆಬನೋನನ್ನು ನಡುಗಿಸಲು ಅದು
ನರ್ತಿಸುತ್ತಿರುವ ಎಳೆಕರುವಿನಂತೆ ಕಾಣುತ್ತದೆ;
ಸಿರ್ಯೋನ್ ಪರ್ವತವು* ಕಂಪಿಸುವಾಗ ಕುಣಿ
ದಾಡುವ ಆಡಿನಮರಿಯಂತೆ ಕಾಣುತ್ತದೆ.
7 ಯೆಹೋವನ ಸ್ವರಕ್ಕೆ ಮಿಂಚುಗಳು ಥಳಥಳನೆ
ಹೊಳೆಯುತ್ತವೆ.
8 ಯೆಹೋವನ ಸ್ವರದಿಂದ ಅರಣ್ಯವು ಕಂಪಿಸುವುದು.
ಆತನ ಸ್ವರಕ್ಕೆ ಕಾದೇಶ್ ಅರಣ್ಯವು* ನಡುಗುವುದು.
9 ಯೆಹೋವನ ಸ್ವರಕ್ಕೆ ಜಿಂಕೆಗಳು ಹೆದರಿಕೊಳ್ಳುತ್ತವೆ;
ಕಾಡಿನ ಮರಗಳು ಬರೀದಾಗುತ್ತವೆ. ಆದರೆ ಆತನ
ಆಲಯದಲ್ಲಿ ಜನರು ಆತನ ಮಹಿಮೆಯನ್ನು ಹಾಡಿ
ಕೊಂಡಾಡುವರು.
10 ಜಲಪ್ರಳಯದ ಕಾಲದಲ್ಲೂ ಯೆಹೋವನು ರಾಜ
ನಾಗಿದ್ದನು. ಯೆಹೋವನು ಸದಾಕಾಲ ರಾಜ
ನಾಗಿರುವನು.
11 ಯೆಹೋವನು ತನ್ನ ಜನರಿಗೆ ಬಲವನ್ನು ದಯ
ಪಾಲಿಸಲಿ. ಆತನು ತನ್ನ ಜನರಿಗೆ ಶಾಂತಿಯನ್ನು
ಸ್ಥಾಪಿಸಲಿ.

## ಕೀರ್ತನೆ 30

*ದೇವಾಲಯದ ಪ್ರತಿಷ್ಠೆಗಾಗಿ ರಚಿಸಲ್ಪಟ್ಟಿದೆ.*

*ರಚನೆಗಾರ: ದಾವೀದ*

1 ಯೆಹೋವನೇ, ನನ್ನನ್ನು ಇಕ್ಕಟ್ಟುಗಳಿಂದ ಮೇಲೆತ್ತಿ
ದವನು ನೀನೇ; ಶತ್ರುಗಳಿಗೆ ಸೋತುಹೋಗಿ ಅವರ
ಹಾಸ್ಯಕ್ಕೆ ಗುರಿಯಾಗದಂತೆ ಮಾಡಿದವನು ನೀನೇ;
ಆದ್ದರಿಂದ ನಿನ್ನನ್ನು ಕೊಂಡಾಡುವೆನು.
2 ನನ್ನ ದೇವರಾದ ಯೆಹೋವನೇ, ನಾನು ನಿನಗೆ
ಪ್ರಾರ್ಥಿಸಿದಾಗ ನೀನು ನನ್ನನ್ನು ಗುಣಪಡಿಸಿದೆ.
3 ಯೆಹೋವನೇ, ನೀನು ನನ್ನನ್ನು ಸಾವಿನಿಂದ ಬದುಕಿ
ಸಿದೆ; ಪಾತಾಳಕ್ಕೆ ಇಳಿದುಹೋಗದಂತೆ ನನ್ನನ್ನು
ಕಾಪಾಡಿದೆ.*
4 ಯೆಹೋವನ ಭಕ್ತರೇ, ಆತನನ್ನು ಕೀರ್ತಿಸಿರಿ! ಆತನ
ಪರಿಶುದ್ಧ ಹೆಸರನ್ನು* ಕೊಂಡಾಡಿರಿ.
5 ಆತನ ಕೋಪವು ಕ್ಷಣಮಾತ್ರವಿರುವುದು. ಆತನ
ಪ್ರೀತಿಯಾದರೊ ಶಾಶ್ವತವಾದದ್ದು. ಸಂಜೆಯಲ್ಲಿ
ದುಃಖದಿಂದ ಮಲಗಿಕೊಂಡರೂ ಮುಂಜಾನೆ ಹರ್ಷ
ದಿಂದ ಎಚ್ಚರಗೊಳ್ಳುವೆನು.
6 ನಾನು ಸುರಕ್ಷಿತವಾಗಿದ್ದಾಗ ನನಗೆ ಕೇಡೇ ಇಲ್ಲವೆಂದು
ಕೊಂಡೆನು.
7 ಯೆಹೋವನೇ, ನಾನು ನಿನ್ನ ಕೃಪೆಗೆ ಪಾತ್ರನಾಗಿದ್ದಾಗ
ನನ್ನನ್ನು ಯಾವುದೂ ಸೋಲಿಸಲಾರದು ಎಂದು
ಕೊಂಡೆನು. ಆದರೆ ನೀನು ನನಗೆ ವಿಮುಖನಾದಾಗ
ಭಯದಿಂದ ನಡುಗತೊಡಗಿದೆ.
8 ಯೆಹೋವನೇ, ನಾನು ನಿನಗೆ ಅಭಿಮುಖನಾಗಿ
ಪ್ರಾರ್ಥಿಸಿದೆ; ಕರುಣೆ ತೋರು ಎಂದು ನಿನ್ನನ್ನು ಕೇಳಿ
ಕೊಂಡೆ.
9 ''ದೇವರೇ, ನಾನು ಸತ್ತು ಸಮಾಧಿಯೊಳಗೆ ಹೋದರೆ,
ಅದರಿಂದ ಒಳ್ಳೆಯದೇನಾದೀತು? ಸತ್ತವರು ಕೇವಲ
ಕೊಳಕಿನಲ್ಲಿ ಬಿದ್ದಿರುವರು! ಅವರು ನಿನ್ನನ್ನು ಸ್ತುತಿಸು
ವುದಿಲ್ಲ! ಶಾಶ್ವತವಾದ ನಿನ್ನ ನಂಬಿಗಸ್ತಿಕೆಯ ಕುರಿತು
ಅವರು ಹೇಳುವುದಿಲ್ಲ.
10 ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳಿ ನನಗೆ
ಕರುಣೆ ತೋರು! ಯೆಹೋವನೇ, ನನಗೆ ಸಹಾಯ
ಮಾಡು!'' ಎಂದು ಕೇಳಿಕೊಂಡೆನು.
11 ಆಗ ನೀನು ನನಗೆ ಸಹಾಯ ಮಾಡಿ ನನ್ನ ಗೋಳಾಟ
ವನ್ನು ಸಂತೋಷದ ನರ್ತನವನ್ನಾಗಿ ಮಾರ್ಪಡಿಸಿದೆ.
ನನ್ನ ಶೋಕ ವಸ್ತ್ರಗಳನ್ನು ತೆಗೆದುಹಾಕಿ ಹರ್ಷ
ವಸ್ತ್ರಗಳನ್ನು ಹೊದಿಸಿದೆ.
12 ನಾನು ಮೌನವಾಗಿರದೆ ಸದಾಕಾಲ ನಿನ್ನನ್ನು ಸ್ತುತಿಸು
ವೆನು. ನನ್ನ ದೇವರಾದ ಯೆಹೋವನೇ, ನಿನ್ನನ್ನು
ಸದಾಕಾಲ ಸ್ತುತಿಸುವೆನು.

## ಕೀರ್ತನೆ 31

*ರಚನೆಗಾರ: ದಾವೀದ*

1 ಯೆಹೋವನೇ, ನಿನ್ನನ್ನೇ ಆಶ್ರಯಿಸಿಕೊಂಡಿದ್ದೇನೆ.
ನನ್ನನ್ನು ನಿರಾಶೆಗೊಳಿಸಬೇಡ. ಕರುಣೆತೋರಿ
ನನ್ನನ್ನು ರಕ್ಷಿಸು.

---

**ಪರಿಶುದ್ಧ … ಆರಾಧಿಸಿರಿ** ಅಥವಾ ''ನಿಮ್ಮ ಮಹಿಮಾಪೂರಿತವಾದ ಪರಿಶುದ್ಧ ಬಟ್ಟೆಗಳನ್ನು ಧರಿಸಿಕೊಂಡು ಆತನ ಮುಂದೆ ಅಡ್ಡಬೀಳಿರಿ.''

**ಸಿರ್ಯೋನ್ ಪರ್ವತ** ಅಥವಾ, ''ಹರ್ಮೋನ್ ಬೆಟ್ಟ''

**ಕಾದೇಶ್ ಅರಣ್ಯ** ಸಿರಿಯಾದಲ್ಲಿರುವ ಒಂದು ಮರುಭೂಮಿ. ''ಪರಿಶುದ್ಧ ಮರುಭೂಮಿ'' ಎಂಬ ಅರ್ಥವನ್ನು ಸಹ ಕೊಡಬಹುದು.

**ನೀನು … ಕಾಪಾಡಿದೆ** ''ಯೆಹೋವನೇ, ನೀನು ನನ್ನನ್ನು ಪಾತಾಳದಿಂದ ಮೇಲೆತ್ತಿದೆ. ಪಾತಾಳದಲ್ಲಿರುವವರನ್ನು ಸೇರದಂತೆ ನನ್ನನ್ನು ಕಾಪಾಡಿ ನನ್ನ ಆತ್ಮವನ್ನು ಚೈತನ್ಯಗೊಳಿಸಿದೆ.''

**ಹೆಸರು** ಅಕ್ಷರಶಃ ''ನೆನಪು,'' ''ಜ್ಞಾಪಕಾರ್ಥ.''

2 ನನಗೆ ಕಿವಿಗೊಡು. ಬೇಗನೆ ಬಂದು, ನನ್ನನ್ನು ರಕ್ಷಿಸು.
ನನಗೆ ಬಂಡೆಯೂ ನನ್ನ ಆಶ್ರಯಸ್ಥಾನವೂ
ಕೋಟೆಯೂ ಆಗಿದ್ದು ನನ್ನನ್ನು ಕಾಪಾಡು!
3 ನೀನೇ ನನ್ನ ಬಂಡೆಯಾಗಿರುವುದರಿಂದ ನಿನ್ನ ಹೆಸರಿನ
ಘನತೆಗಾಗಿ ನನ್ನನ್ನು ನಡೆಸು; ನನಗೆ ಮಾರ್ಗದರ್ಶನ
ನೀಡು.
4 ನನ್ನ ವೈರಿಗಳು ನನಗೆ ಬಲೆಬೀಸಿದ್ದಾರೆ. ಅವರ ಬಲೆಗೆ
ಸಿಕ್ಕಿಬೀಳದಂತೆ ನನ್ನನ್ನು ರಕ್ಷಿಸು. ನೀನೇ ನನ್ನ ಆಶ್ರಯ
ಸ್ಥಾನವಾಗಿರುವೆ.
5 ಯೆಹೋವನೇ, ನಮ್ಮ ಭರವಸೆಗೆ ಯೋಗ್ಯನಾದ
ದೇವರು ನೀನೊಬ್ಬನೇ. ನನ್ನ ಜೀವವನ್ನು ನಿನ್ನ
ಕೈಗಳಲ್ಲಿ ಇಟ್ಟಿರುವೆ. ನನ್ನನ್ನು ರಕ್ಷಿಸು!
6 ಸುಳ್ಳುದೇವರುಗಳನ್ನು ಪೂಜಿಸುವವರನ್ನು ನಾನು
ದ್ವೇಷಿಸುವೆನು. ನಾನು ಯೆಹೋವನಲ್ಲಿಯೇ ಭರವಸ
ವಿಡುವೆನು.
7 ದೇವರೇ, ನಿನ್ನ ಕರುಣೆಯು ನನ್ನನ್ನು ಉಲ್ಲಾಸಗೊಳಿ
ಸುವುದು. ನನ್ನ ಸಂಕಟವನ್ನು ನೀನು ನೋಡಿರುವೆ;
ನನಗಿರುವ ಆಪತ್ತುಗಳು ನಿನಗೆ ತಿಳಿದಿವೆ.
8 ವೈರಿಗಳು ನನ್ನನ್ನು ಸೆರೆಹಿಡಿದೊಯ್ಯಲು ನೀನು ಬಿಟ್ಟು
ಕೊಡುವುದಿಲ್ಲ; ನನ್ನನ್ನು ಅವರ ಬಲೆಗಳಿಂದ ಬಿಡು
ಗಡೆ ಮಾಡುವೆ.
9 ಯೆಹೋವನೇ, ನನಗೆ ಅನೇಕ ಇಕ್ಕಟ್ಟುಗಳಿವೆ;
ನನ್ನನ್ನು ಕರುಣಿಸು. ಅತ್ತು ಅತ್ತು ನನ್ನ ಕಣ್ಣುಗಳು
ನೋಯುತ್ತಿವೆ, ನನ್ನ ಗಂಟಲು ನೋಯುತ್ತಿದೆ.
ಹೊಟ್ಟೆಯೂ ನೋಯುತ್ತಿದೆ.
10 ನನ್ನ ಜೀವಿತವು* ದುಃಖದಲ್ಲಿ ಕೊನೆಗೊಳ್ಳುತ್ತಿದೆ.
ನನ್ನ ವರ್ಷಗಳು ನಿಟ್ಟುಸಿರಿನಲ್ಲೇ ಕಳೆದುಹೋಗುತ್ತಿವೆ.
ನನ್ನ ಇಕ್ಕಟ್ಟುಗಳು ನನ್ನ ಶಕ್ತಿಯನ್ನು ಕುಂದಿಸುತ್ತಿವೆ.
ನನ್ನ ಬಲವು ನನ್ನನ್ನು ಬಿಟ್ಟುಹೋಗುತ್ತಿದೆ.*
11 ವೈರಿಗಳು ನನ್ನನ್ನು ಕೀಳಾಗಿ ಕಾಣುತ್ತಿದ್ದಾರೆ; ನನ್ನ ನೆರೆ
ಹೊರೆಯವರೂ ನನ್ನನ್ನು ನಿಂದಿಸುವರು; ನನ್ನ
ಸಂಬಂಧಿಕರೂ ನನ್ನ ವಿಷಯದಲ್ಲಿ ಭಯಪಡುವರು;
ನನ್ನನ್ನು ದಾರಿಯಲ್ಲಿ ಕಂಡರೂ ಕಾಣದಂತೆ ಹೊರಟು
ಹೋಗುವರು.
12 ಕಳೆದುಹೋದ ಉಪಕರಣದಂತೆ ಅವರು ನನ್ನನ್ನು
ಮರೆತೇ ಬಿಟ್ಟಿದ್ದಾರೆ.
13 ಜನರು ನನ್ನನ್ನು ಕುರಿತು ಭಯಂಕರವಾದ ಸಂಗತಿ
ಗಳನ್ನು ಮಾತಾಡಿಕೊಳ್ಳುತ್ತಿದ್ದಾರೆ. ಅವರು ದಂಗೆ
ಯೆದ್ದು ನನ್ನನ್ನು ಕೊಲ್ಲಬೇಕೆಂದುಕೊಂಡಿದ್ದಾರೆ.

**ಜೀವಿತ** ಅಕ್ಷರಶಃ, ಪ್ರಾಣ.

**ನನ್ನ ಬಲವು ನನ್ನನ್ನು ಬಿಟ್ಟುಹೋಗುತ್ತಿದೆ** ಅಕ್ಷರಶಃ, ‘‘ನನ್ನ ಎಲುಬುಗಳು ಸವೆದುಹೋಗುತ್ತಿವೆ.’’

14 ಯೆಹೋವನೇ, ನಾನಂತೂ ನಿನ್ನಲ್ಲೇ ಭರವಸ
ವಿಟ್ಟಿದ್ದೇನೆ. ನೀನೇ ನನ್ನ ದೇವರು.
15 ನನ್ನ ಜೀವವು ನಿನ್ನ ಕೈಗಳಲ್ಲಿದೆ . ವೈರಿಗಳಿಂದ ನನ್ನನ್ನು
ರಕ್ಷಿಸು. ನನ್ನನ್ನು ಅಟ್ಟಿಸಿಕೊಂಡು* ಬರುತ್ತಿರುವ ಜನ
ರಿಂದ ನನ್ನನ್ನು ರಕ್ಷಿಸು.
16 ದಯವಿಟ್ಟು ನಿನ್ನ ಸೇವಕನನ್ನು ಸ್ವೀಕರಿಸಿಕೊ. ಕರುಣೆ
ಯಿಂದ ನನ್ನನ್ನು ರಕ್ಷಿಸು!
17 ಯೆಹೋವನೇ, ನಾನು ನಿನ್ನಲ್ಲಿ ಪ್ರಾರ್ಥಿಸಿದೆನು. ಆದ್ದ
ರಿಂದ ನಾನು ನಿರಾಶನಾಗುವುದಿಲ್ಲ. ಕೆಡುಕರಾ
ದರೋ ನಿರಾಶರಾಗುವರು. ಅವರು ಮೌನವಾಗಿ
ಸಮಾಧಿಗೆ ಹೋಗುವರು.
18 ಕೆಡುಕರು ಜಂಬಕೊಚ್ಚುವರು; ಒಳ್ಳೆಯವರ ಬಗ್ಗೆ
ಸುಳ್ಳುಗಳನ್ನು ಹೇಳುವರು. ಆ ಕೆಡುಕರು ದುರಹಂ
ಕಾರಿಗಳಾಗಿದ್ದಾರೆ; ಅವರ ಸುಳ್ಳುತುಟಿಗಳಾದರೋ
ಮೌನವಾಗಿರುತ್ತವೆ.
19 ದೇವರೇ, ನೀನು ನಿನ್ನ ಭಕ್ತರಿಗಾಗಿ ಅಮೂಲ್ಯವಾದ
ವುಗಳನ್ನು ಅಡಗಿಸಿಟ್ಟಿರುವೆ. ನಿನ್ನಲ್ಲಿ ಭರವಸವಿಟ್ಟ
ರುವ ಜನರಿಗಾಗಿ ಎಲ್ಲರ ಮುಂದೆ ನೀನು ಮಾಡುವ
ಒಳ್ಳೆಯ ಕಾರ್ಯಗಳು ಎಷ್ಟೋ ವಿಶೇಷವಾಗಿವೆ.
20 ನೀತಿವಂತರಿಗೆ ಕೇಡು ಮಾಡಲು ಕೆಡುಕರು ಒಟ್ಟಾಗಿ
ಸೇರಿದ್ದಾರೆ. ನೀನಾದರೋ ನೀತಿವಂತರನ್ನು ಮರೆ
ಮಾಡಿ ಕಾಪಾಡುವೆ; ಅವರನ್ನು ನಿನ್ನ ಆಶ್ರಯದ
ಸ್ಥಾನದಲ್ಲಿ ಅಡಗಿಸಿಡುವೆ.
21 ಯೆಹೋವನಿಗೆ ಸ್ತೋತ್ರವಾಗಲಿ! ವೈರಿಗಳು ಈ
ಪಟ್ಟಣಕ್ಕೆ ಮುತ್ತಿಗೆ ಹಾಕಿದಾಗ ಆತನು ತನ್ನ ಶಾಶ್ವತ
ಪ್ರೀತಿಯನ್ನು ಆಶ್ಚರ್ಯಕರವಾಗಿ ತೋರಿದ್ದಾನೆ.
22 ನಾನು ಭಯಗೊಂಡು, ‘‘ದೇವರು ನನ್ನನ್ನು ತನ್ನ
ಸಾನಿಧ್ಯದಿಂದ ಹೊರಗಟ್ಟಿದ್ದಾನೆ’’ ಎಂದುಕೊಂಡೆನು.
ಆದರೆ ನಾನು ನಿನ್ನನ್ನು ಕೂಗಿಕೊಂಡಾಗ ನೀನು
ಕಿವಿಗೊಟ್ಟೆ.
23 ದೇವರ ಭಕ್ತರೇ, ನೀವು ಯೆಹೋವನನ್ನು ಪ್ರೀತಿಸಲೇ
ಬೇಕು! ಆತನು ನಂಬಿಗಸ್ತರನ್ನು ಕಾಪಾಡುವನು;
ಗರ್ವಿಷ್ಠರನ್ನಾದರೊ ದಂಡಿಸುವನು.
24 ಯೆಹೋವನನ್ನು ನಿರೀಕ್ಷಿಸಿಕೊಂಡಿರುವವರೇ, ದೃಢ
ವಾಗಿಯೂ ಧೈರ್ಯವಾಗಿಯೂ ಇರಿ.

## ಕೀರ್ತನೆ 32

*ರಚನೆಗಾರ: ದಾವೀದ*

1 ಯಾವನ ಪಾಪಗಳು ಕ್ಷಮಿಸಲ್ಪಟ್ಟಿವೆಯೋ ಯಾವನ
ದ್ರೋಹಗಳು ಅಳಿಸಲ್ಪಟ್ಟಿವೆಯೋ ಅವನೇ ಧನ್ಯನು.

**ಅಟ್ಟಿಸಿಕೊಂಡು** ಅಥವಾ ‘‘ನನ್ನನ್ನು ಹಿಂಸಿಸುತ್ತಿರುವ’’ ‘‘ನನ್ನನ್ನು ನೋಯಿಸುತ್ತಿರುವ.’’

2 ಯೆಹೋವನು ಯಾವನನ್ನು ದೋಷಿಯೆಂದು ಹೇಳು
ವುದಿಲ್ಲವೋ ಯಾವನು ತನ್ನ ಗುಪ್ತಪಾಪಗಳನ್ನು ಅಡ
ಗಿಸಿಟ್ಟುಕೊಳ್ಳುವುದಿಲ್ಲವೊ ಅವನೇ ಧನ್ಯನು.
3 ನಾನು ನನ್ನ ಪಾಪವನ್ನು ಅರಿಕೆಮಾಡದೆ ಇದ್ದಾಗ ದಿನ
ವೆಲ್ಲಾ ಪಾಪದಿಂದ ನರಳಬೇಕಾಯಿತು; ವೇದನೆ
ಯಿಂದ ನನ್ನ ಎಲುಬುಗಳೇ ಸವೆದು ಹೋಗು
ವಂತಾಯಿತು.
4 ಹಗಲಿರುಳು ನಿನ್ನ ಶಿಕ್ಷಾಹಸ್ತವು ನನ್ನ ಮೇಲೆ ಭಾರ
ವಾಗಿತ್ತು. ನಾನು ಬೇಸಿಗೆಯಲ್ಲಿ ಒಣಗಿಹೋದ
ಭೂಮಿಯಂತಾದೆನು.
5 ಆಗ ನಾನು ನನ್ನ ಪಾಪಗಳನ್ನೆಲ್ಲ ಯೆಹೋವನಿಗೆ ಅರಿಕೆ
ಮಾಡಲು ನಿರ್ಧರಿಸಿದೆನು. ಯೆಹೋವನೇ, ನಾನು
ನನ್ನ ಪಾಪಗಳನ್ನು ಅರಿಕೆಮಾಡಿಕೊಂಡಾಗ, ನನ್ನ
ಯಾವ ದೋಷವನ್ನೂ ನಿನಗೆ ಮರೆಮಾಡಲಿಲ್ಲ.
ನೀನು ನನ್ನ ಪಾಪಗಳನ್ನು ಕ್ಷಮಿಸಿದೆ.
6 ದೇವರೇ, ಈ ಕಾರಣದಿಂದಲೇ ನಿನ್ನ ಭಕ್ತರು ನಿನ್ನಲ್ಲಿ
ಪ್ರಾರ್ಥಿಸಲಿ. ಆಪತ್ತುಗಳು ಮಹಾಪ್ರವಾಹದಂತೆ
ಬಂದರೂ ಅವರನ್ನು ಮುಟ್ಟಲಾರವು.
7 ನೀನು ನನಗೆ ಆಶ್ರಯದುರ್ಗವಾಗಿರುವೆ. ಇಕ್ಕಟ್ಟು
ಗಳಲ್ಲಿ ನೀನು ನನ್ನನ್ನು ಸುತ್ತುವರಿದು ಕಾಪಾಡುವೆ.
ಆದ್ದರಿಂದ ನಿನ್ನ ರಕ್ಷಣೆಯ ಕುರಿತು ಹಾಡಿ
ಕೊಂಡಾಡುವೆ.
8 ಯೆಹೋವನು ಇಂತೆನ್ನುತ್ತಾನೆ: ‘‘ನಿನಗೆ ಜೀವ
ಮಾರ್ಗವನ್ನು ಉಪದೇಶಿಸಿ ಮಾರ್ಗದರ್ಶನ ನೀಡು
ವೆನು; ನಿನ್ನನ್ನು ಕಾಪಾಡಿ ನಿನಗೆ ಮಾರ್ಗದರ್ಶಿ
ಯಾಗಿರುವೆನು.
9 ಆದ್ದರಿಂದ ಕುದುರೆಯಂತಾಗಲೀ ಹೇಸರಕತ್ತೆ
ಯಂತಾಗಲೀ ಮೂಢರಾಗಿರಬೇಡಿ. ಬಾರುಕಡಿ
ವಾಣಗಳಿಲ್ಲದಿದ್ದರೆ ಅವು ನಿಮ್ಮ ಸ್ವಾಧೀನಕ್ಕೆ
ಬರುವುದಿಲ್ಲ.
10 ಕೆಡುಕರಿಗೆ ಅನೇಕ ಕೇಡುಗಳಾಗುತ್ತವೆ. ಆದರೆ
ಯೆಹೋವನಲ್ಲಿ ಭರವಸವಿಟ್ಟಿರುವವರನ್ನು ಆತನ
ಶಾಶ್ವತವಾದ ಪ್ರೀತಿಯು ಆವರಿಸಿಕೊಳ್ಳುವುದು.
11 ನೀತಿವಂತರೇ, ಹರ್ಷಿಸಿರಿ; ಯೆಹೋವನಲ್ಲಿ
ಆನಂದಿಸಿರಿ. ಶುದ್ಧ ಹೃದಯವುಳ್ಳವರೇ, ಉಲ್ಲಾಸಿಸಿರಿ.

## ಕೀರ್ತನೆ 33

1 ನೀತಿವಂತರೇ, ಯೆಹೋವನಲ್ಲಿ ಉಲ್ಲಾಸಪಡಿರಿ.
ಯಥಾರ್ಥವಂತರು ಆತನನ್ನು ಸ್ತುತಿಸುವುದು
ಯೋಗ್ಯವಾಗಿದೆ.
2 ಲೈರ್* ವಾದ್ಯವನ್ನು ನುಡಿಸುತ್ತಾ ಯೆಹೋವನನ್ನು
ಸ್ತುತಿಸಿರಿ! ಹತ್ತುತಂತಿಗಳ ಹಾರ್ಪ್‌ವಾದ್ಯವನ್ನು
ಬಾರಿಸುತ್ತಾ ಆತನನ್ನು ಕೊಂಡಾಡಿರಿ.
3 ಆತನಿಗೆ ಹೊಸ ಹಾಡನ್ನು* ಹಾಡಿರಿ! ಹಾರ್ಪ್‌ವಾದ್ಯ
ಗಳನ್ನು ಇಂಪಾಗಿ ನುಡಿಸುತ್ತಾ ಆನಂದದಿಂದ
ಆರ್ಭಟಿಸಿರಿ.
4 ಯೆಹೋವನ ವಾಕ್ಯವು ಸತ್ಯವಾದದ್ದು! ಆತನ ಕಾರ್ಯ
ಗಳೆಲ್ಲಾ ಭರವಸೆಗೆ ಯೋಗ್ಯವಾಗಿವೆ.
5 ಆತನು ನೀತಿಯನ್ನೂ ನ್ಯಾಯವನ್ನೂ ಪ್ರೀತಿಸುವನು.
ಯೆಹೋವನ ಶಾಶ್ವತವಾದ ಪ್ರೀತಿಯು ಭೂಲೋಕ
ವನ್ನೆಲ್ಲಾ ತುಂಬಿಕೊಂಡಿದೆ.
6 ಯೆಹೋವನು ಆಜ್ಞಾಪಿಸಲು ಆಕಾಶವು ಸೃಷ್ಟಿ
ಯಾಯಿತು! ಆತನ ಉಸಿರು ಭೂಮಿಯ ಮೇಲಿರುವ
ಸಮಸ್ತವನ್ನು ಸೃಷ್ಟಿಸಿತು.
7 ಆತನು ನೀರುಗಳನ್ನು ಒಟ್ಟುಗೂಡಿಸಿ ಸಮುದ್ರವನ್ನು
ನಿರ್ಮಿಸಿದನು; ಮಹಾಸಾಗರಕ್ಕೆ ಸ್ಥಳವನ್ನು ಗೊತ್ತು
ಪಡಿಸಿದನು.
8 ಭೂಲೋಕದವರೆಲ್ಲರೂ ಯೆಹೋವನಲ್ಲಿ ಭಯ
ಭಕ್ತಿಯಿಂದಿರಲಿ. ಭೂನಿವಾಸಿಗಳೆಲ್ಲರೂ ಆತನಿಗೆ
ಭಯಪಡಲಿ.
9 ಯಾಕಂದರೆ ಆತನು ನುಡಿದಾಗ ಭೂಲೋಕವು ಸೃಷ್ಟಿ
ಯಾಯಿತು; ಆತನು ಆಜ್ಞಾಪಿಸಿದಾಗ ಸಮಸ್ತವು
ಉಂಟಾಯಿತು.
10 ಯೆಹೋವನು ಜನಾಂಗಗಳ ಉದ್ದೇಶಗಳನ್ನು ವ್ಯರ್ಥ
ಗೊಳಿಸಬಲ್ಲನು; ಅವರ ಆಲೋಚನೆಗಳನ್ನು ನಿಷ್ಫಲ
ಮಾಡಬಲ್ಲನು.
11 ಆದರೆ ಯೆಹೋವನ ಯೋಜನೆಗಳು ಶಾಶ್ವತವಾಗಿವೆ.
ಆತನ ಆಲೋಚನೆಗಳು ಸದಾಕಾಲಕ್ಕೂ ಒಳ್ಳೆಯ
ದಾಗಿವೆ.
12 ಯಾರಿಗೆ ಯೆಹೋವನು ದೇವರಾಗಿದ್ದಾನೋ
ಅವರೇ ಧನ್ಯರು. ಯಾಕಂದರೆ ಆತನು ಅವರನ್ನು
ಸ್ವಕೀಯರನ್ನಾಗಿ ಆರಿಸಿಕೊಂಡಿದ್ದಾನೆ.
13 ಯೆಹೋವನು ಪರಲೋಕದಿಂದ ಮನುಷ್ಯರನ್ನು
ದೃಷ್ಟಿಸಿ ನೋಡುವನು.
14 ಆತನು ತನ್ನ ಮಹಾಸಿಂಹಾಸನದಿಂದ ಭೂನಿವಾಸಿ
ಗಳೆಲ್ಲರನ್ನು ನೋಡುವನು.
15 ಅವರೆಲ್ಲರ ಮನಸ್ಸುಗಳನ್ನು ಸೃಷ್ಟಿಸಿದವನು ಆತನೇ.
ಅವರೆಲ್ಲರ ಆಲೋಚನೆಗಳು ಆತನಿಗೆ ತಿಳಿದಿವೆ.
16 ಮಹಾಸೇನಾಬಲದಿಂದಲೇ ಯಾವ ಅರಸನಿಗೂ
ಜಯವಾಗುವುದಿಲ್ಲ. ಭುಜಬಲದಿಂದಲೇ ಯಾವ
ಯುದ್ಧ ವೀರನೂ ಸುರಕ್ಷಿತನಾಗಿರಲಾರನು.

---

**ಲೈರ್** ಹಾರ್ಪ್ ವಾದ್ಯದಂತೆ ಹಲವಾರು ತಂತಿಗಳಿರುವ ವಾದ್ಯ.

**ಹೊಸ ಹಾಡು** ದೇವರು ತನ್ನ ಜನರಿಗಾಗಿ ಯಾವುದಾದರೂ ಹೊಸದಾದ ಮತ್ತು ಅದ್ಭುತವಾದ ಕಾರ್ಯವನ್ನು ಮಾಡಿದಾಗಲೆಲ್ಲಾ ಆದರ ಬಗ್ಗೆ ಅವರು ಹೊಸ ಹಾಡನ್ನು ಬರೆಯುತ್ತಿದ್ದರು. ಆದ್ದರಿಂದ ದೇವರು ತನ್ನ ಜನರಿಗಾಗಿ ಹೊಸ ಕಾರ್ಯವನ್ನು ಮಾಡಿದ್ದಾನೆಂದು ಇದು ತೋರಿಸುತ್ತದೆ.

17 ಯುದ್ಧದಲ್ಲಿ ದೊರೆಯುವ ಜಯ ಕುದುರೆಗಳಿಂದಲ್ಲ. ಅವುಗಳ ಬಲವು ನಿನ್ನನ್ನು ರಕ್ಷಿಸಲಾರದು.
18 ಯೆಹೋವನು ತನ್ನಲ್ಲಿ ಭಯಭಕ್ತಿಯುಳ್ಳವರನ್ನು ಲಕ್ಷಿಸುವನು. ಆತನ ಶಾಶ್ವತವಾದ ಪ್ರೀತಿಯು ಆತನ ಭಕ್ತರನ್ನು ಕಾಪಾಡುವುದು.
19 ಅವರನ್ನು ಸಾವಿನಿಂದ ರಕ್ಷಿಸುವಾತನು ಆತನೇ. ಅವರು ಹಸಿವೆಯಿಂದಿರುವಾಗ ಆತನು ಅವರಿಗೆ ಶಕ್ತಿ ಕೊಡುವನು.
20 ಆದ್ದರಿಂದ ಯೆಹೋವನಿಗಾಗಿಯೇ ಕಾದು ಕೊಂಡಿರುತ್ತೇವೆ. ಆತನೇ ನಮ್ಮ ಸಹಾಯಕನೂ ಗುರಾಣಿಯೂ ಆಗಿದ್ದಾನೆ.
21 ದೇವರು ನನ್ನನ್ನು ಸಂತೋಷಗೊಳಿಸುವನು. ನಾನು ಆತನ ಪರಿಶುದ್ಧ ಹೆಸರಿನಲ್ಲಿಯೇ ಭರವಸವಿಟ್ಟಿದ್ದೇನೆ.
22 ಯೆಹೋವನೇ, ನಾವು ನಿನ್ನನ್ನೇ ನಿರೀಕ್ಷಿಸಿಕೊಂಡಿದ್ದೇವೆ. ನಿನ್ನ ಶಾಶ್ವತವಾದ ಪ್ರೀತಿಯು ನಮ್ಮ ಮೇಲಿರಲಿ.

## ಕೀರ್ತನೆ 34 *

*ದಾವೀದನು ಹುಚ್ಚನಂತೆ ವರ್ತಿಸಿ, ಅಬೀಮೆಲೆಕನಿಂದ ಹೊರಡಿಸಲ್ಪಟ್ಟಾಗ ರಚಿಸಲ್ಪಟ್ಟಿತು.*
*ರಚನೆಗಾರ: ದಾವೀದ*

1 ನಾನು ಯೆಹೋವನನ್ನು ಎಡೆಬಿಡದೆ ಕೊಂಡಾಡುವೆನು. ಆತನ ಸ್ತೋತ್ರವು ಯಾವಾಗಲೂ ನನ್ನ ಬಾಯಲ್ಲಿರುವುದು.
2 ದೀನರೇ, ನನ್ನ ಮನಸ್ಸು ಯೆಹೋವನಲ್ಲಿ ಹಿಗ್ಗುತ್ತಿರುವುದನ್ನು ಕೇಳಿ ಸಂತೋಷಪಡಿರಿ.
3 ನನ್ನೊಂದಿಗೆ ಯೆಹೋವನನ್ನು ಸ್ತುತಿಸಿರಿ. ನಾವು ಒಟ್ಟಾಗಿ ಆತನ ಹೆಸರನ್ನು ಸನ್ಮಾನಿಸೋಣ.
4 ನಾನು ಯೆಹೋವನ ಸನ್ನಿಧಿಯಲ್ಲಿ ಮೊರೆಯಿಟ್ಟಾಗ ಆತನು ನನಗೆ ಸಹಾಯಮಾಡಿದನು. ನನ್ನನ್ನು ಎಲ್ಲಾ ಭೀತಿಗಳಿಂದ ಬಿಡಿಸಿದನು.
5 ಆತನನ್ನೇ ದೃಷ್ಟಿಸುವವರು ಸಹಾಯವನ್ನು ಹೊಂದಿಕೊಳ್ಳುವರು.* ಅವರಿಗೆ ಆಶಾಭಂಗವಾಗದು.
6 ಕಷ್ಟದಲ್ಲಿದ್ದ ಈ ಬಡಮನುಷ್ಯನು ಮೊರೆಯಿಡಲು ಯೆಹೋವನು ಕೇಳಿ ಎಲ್ಲಾ ಇಕ್ಕಟ್ಟುಗಳಿಂದ ಬಿಡಿಸಿದನು.
7 ಯೆಹೋವನ ಭಕ್ತರ ಸುತ್ತಲೂ ಆತನ ದೂತನು ದಂಡಿಳಿಸಿ ಕಾವಲಾಗಿದ್ದು ಕಾಪಾಡುವನು.
8 ಯೆಹೋವನು ಎಷ್ಟು ಒಳ್ಳೆಯವನೆಂಬುದನ್ನು ಅನುಭವದಿಂದಲೇ ತಿಳಿದುಕೊಳ್ಳಿರಿ. ಆತನನ್ನು ಆಶ್ರಯಿಸಿಕೊಂಡವರು ಎಷ್ಟೋ ಭಾಗ್ಯವಂತರು.
9 ಯೆಹೋವನ ಜನರೇ, ಆತನನ್ನು ಆರಾಧಿಸಿರಿ. ಆತನ ಭಕ್ತರಿಗೆ ಬೇರೆ ಯಾವ ಆಶ್ರಯಸ್ಥಾನವೂ ಇಲ್ಲ.
10 ಪ್ರಾಯದ ಸಿಂಹಗಳಿಗೂ ಹೊಟ್ಟೆಗಿಲ್ಲದಿರಬಹುದು. ಯೆಹೋವನ ಸನ್ನಿಧಿಯಲ್ಲಿ ಬೇಡಿಕೊಳ್ಳುವವರು ಸುವರಗಳನ್ನು ಹೊಂದಿಕೊಳ್ಳುವರು.
11 ಮಕ್ಕಳಿರಾ, ಬನ್ನಿರಿ, ನನ್ನ ಮಾತನ್ನು ಕೇಳಿರಿ; ಯೆಹೋವನಲ್ಲಿ ನಿಮಗಿರಬೇಕಾದ ಭಯಭಕ್ತಿಯನ್ನು ಕಲಿಸಿಕೊಡುವೆನು.
12 ದೀರ್ಘಾಯುಷ್ಯವು ಬೇಕೋ? ಬಹುಕಾಲ ಸುಖವನ್ನು ಅನುಭವಿಸಬೇಕೋ?
13 ಹಾಗಾದರೆ ಕೆಟ್ಟದನ್ನು ಮಾತಾಡದಂತೆ ನಾಲಿಗೆಯನ್ನು ಕಾದುಕೊಳ್ಳಿರಿ. ಸುಳ್ಳಾಡದಂತೆ ತುಟಿಗಳನ್ನು ಇಟ್ಟುಕೊಳ್ಳಿರಿ.
14 ಕೆಟ್ಟದ್ದನ್ನು ಬಿಟ್ಟು ಒಳ್ಳೆಯವುಗಳನ್ನು ಮಾಡಿರಿ ಸಮಾಧಾನವನ್ನು ಬಯಸಿ ಅದನ್ನು ಪಡೆದುಕೊಳ್ಳಲು ಪ್ರಯತ್ನಿಸಿರಿ.
15 ಯೆಹೋವನು ನೀತಿವಂತರನ್ನು ಕಾಪಾಡುವನು. ಆತನು ಅವರ ಪ್ರಾರ್ಥನೆಗಳಿಗೆ ಕಿವಿಗೊಡುವನು.
16 ಕೆಡುಕರಿಗಾದರೊ ಯೆಹೋವನು ವಿರೋಧವಾಗಿರುವನು. ಆತನು ಅವರನ್ನು ಸಂಪೂರ್ಣವಾಗಿ ನಾಶಮಾಡುವನು.
17 ಯೆಹೋವನಿಗೆ ಪ್ರಾರ್ಥಿಸಿರಿ, ಆತನು ನಿಮಗೆ ಕಿವಿಗೊಡುವನು; ನಿಮ್ಮನ್ನು ಎಲ್ಲಾ ಇಕ್ಕಟ್ಟುಗಳಿಂದ ರಕ್ಷಿಸುವನು.
18 ಮನಗುಂದಿದವರಿಗೆ ಯೆಹೋವನು ಸಮೀಪವಾಗಿದ್ದಾನೆ; ಕುಗ್ಗಿಹೋದ ಅವರನ್ನು ಆತನು ರಕ್ಷಿಸುವನು.
19 ನೀತಿವಂತರಿಗೆ ಅನೇಕ ಕಷ್ಟಗಳು ಬಂದರೂ ಯೆಹೋವನು ಅವೆಲ್ಲವುಗಳಿಂದ ಅವರನ್ನು ಬಿಡಿಸುವನು.
20 ಆತನು ಅವರ ಎಲುಬುಗಳನ್ನೆಲ್ಲ ಕಾಪಾಡುವನು. ಅವುಗಳಲ್ಲಿ ಒಂದಾದರೂ ಮುರಿದು ಹೋಗುವುದಿಲ್ಲ.
21 ದುಷ್ಟರಾದರೊ ಆಪತ್ತುಗಳಿಂದ ಸಾಯುವರು. ನೀತಿವಂತರ ವೈರಿಗಳು ನಾಶವಾಗುವರು.
22 ಯೆಹೋವನು ತನ್ನ ಸೇವಕರ ಪ್ರಾಣವನ್ನು ರಕ್ಷಿಸುವನು. ಆತನನ್ನು ಆಶ್ರಯಿಸಿಕೊಂಡಿರುವವರಲ್ಲಿ ಒಬ್ಬರಾದರೂ ನಾಶವಾಗುವುದಿಲ್ಲ.

## ಕೀರ್ತನೆ 35

*ರಚನೆಗಾರ: ದಾವೀದ*

1 ಯೆಹೋವನೇ, ನನ್ನ ವ್ಯಾಜ್ಯಗಳಲ್ಲಿ ವಾದಿಸು! ನನ್ನ ಯುದ್ಧಗಳಲ್ಲಿ ಹೋರಾಡು!

---

**ಕೀರ್ತನೆ 34** ಹಿಬ್ರೂವಿನಲ್ಲಿ ಈ ಕೀರ್ತನೆಯ ಪ್ರತಿಯೊಂದು ವಚನ ಹೀಬ್ರೂ ಅಕ್ಷರಮಾಲೆಗನುಸಾರವಾಗಿ ರಚಿತವಾಗಿದೆ.

**ಆತನನ್ನೇ … ಹೊಂದಿಕೊಳ್ಳುವರು** ಅಕ್ಷರಶಃ, 'ಆತನ ಕಡೆಗೆ ನೋಡಿರಿ ಮತ್ತು ಹೊಳೆಯಿರಿ, ನಿಮ್ಮ ಮುಖವು ಕಳೆಗುಂದದಿರಲಿ!'

2 ಯೆಹೋವನೇ, ಗುರಾಣಿಗಳನ್ನು ಹಿಡಿದುಕೊಂಡು ನನಗೆ ಸಹಾಯಕನಾಗಿ ನಿಲ್ಲು.
3 ಈಟಿಯನ್ನೂ ಭಲ್ಲೆಯನ್ನೂ* ತೆಗೆದುಕೊ. ನನ್ನನ್ನು ಬೆನ್ನಟ್ಟಿಕೊಂಡು ಬರುತ್ತಿರುವ ವೈರಿಗಳೊಡನೆ ಹೋರಾಡು. ''ನಾನು ನಿನ್ನನ್ನು ರಕ್ಷಿಸುತ್ತೇನೆ'' ಎಂಬ ಅಭಯವಚನ ನೀಡು.
4 ನನ್ನನ್ನು ಕೊಲ್ಲಬೇಕೆಂದಿರುವವರು ನಿರಾಶೆಗೊಂಡು ನಾಚಿಕೆಗೀಡಾಗಲಿ. ನನಗೆ ಕೇಡು ಮಾಡಬೇಕೆಂದಿರುವವರು ಅವಮಾನಗೊಂಡು ಓಡಿಹೋಗಲಿ.
5 ಅವರು ಗಾಳಿಬಡಿದುಕೊಂಡು ಹೋಗುವ ಹೊಟ್ಟಿನಂತಾಗಲಿ; ಯೆಹೋವನ ದೂತನು ಅವರನ್ನು ಹಿಂದಟ್ಟಲಿ.
6 ಯೆಹೋವನೇ, ಅವರ ರಸ್ತೆಯು ಕತ್ತಲಾಗಿರಲಿ; ಜಾರುತ್ತಿರಲಿ. ಯೆಹೋವನ ದೂತನು ಅವರನ್ನು ಹಿಂದಟ್ಟಲಿ.
7 ನಾನು ನಿರಪರಾಧಿಯಾಗಿದ್ದರೂ ಅವರು ನನಗೆ ಬಲೆಯೊಡ್ಡಿದ್ದಾರೆ. ನಿಷ್ಕಾರಣವಾಗಿ ಅವರು ನನಗೆ ಬಲೆಯೊಡ್ಡಿದ್ದಾರೆ.
8 ಅವರು ತಮ್ಮ ಬಲೆಗಳಿಗೆ ತಾವೇ ಸಿಕ್ಕಿಕೊಳ್ಳಲಿ; ತಾವು ತೋಡಿದ ಗುಂಡಿಯೊಳಗೆ ತಾವೇ ಮುಗ್ಗರಿಸಿ ಬೀಳಲಿ. ಇದ್ದಕ್ಕಿದಂತೆ ಅಪಾಯವು ಅವರನ್ನು ಹಿಡಿದುಕೊಳ್ಳಲಿ.
9 ಆಗ ನಾನು ಯೆಹೋವನಲ್ಲಿ ಹರ್ಷಿಸುವೆನು. ಆತನು ನನ್ನನ್ನು ರಕ್ಷಿಸಿದ್ದರಿಂದ ಸಂತೋಷಪಡುವೆನು.
10 ಯೆಹೋವನೇ, ಹೃದಯಪೂರ್ವಕವಾಗಿ ಹೇಳುವೆ, ''ನಿನಗೆ ಸಮಾನರು ಇಲ್ಲವೇ ಇಲ್ಲ. ಬಡವರನ್ನು ಬಲಿಷ್ಠರಿಂದ ತಪ್ಪಿಸಿ ರಕ್ಷಿಸುವಾತನು ನೀನೇ. ಬಲಿಷ್ಠರನ್ನು ಸೂರೆಮಾಡಿ ಬಡವರಿಗೂ ಅಸಹಾಯಕರಿಗೂ ಕೊಡುವಾತನು ನೀನೇ.''
11 ಸುಳ್ಳುಸಾಕ್ಷಿಗಳು ನನಗೆ ಕೇಡು ಮಾಡಬೇಕೆಂದಿದ್ದಾರೆ. ನನಗೆ ತಿಳಿಯದ ವಿಷಯಗಳ ಮೇಲೆ ಅವರು ಪ್ರಶ್ನೆಗಳನ್ನು ಕೇಳುವರು.
12 ನಾನು ಅವರಿಗೆ ಉಪಕಾರಗಳನ್ನು ಮಾಡಿದ್ದರೂ ಅವರು ನನಗೆ ಅಪಕಾರಗಳನ್ನೇ ಮಾಡುತ್ತಾರೆ. ಯೆಹೋವನೇ, ನನಗೆ ಯೋಗ್ಯವಾದವುಗಳನ್ನು ದಯಪಾಲಿಸು.
13 ಅವರು ಅಸ್ವಸ್ಥರಾಗಿದ್ದಾಗ ನಾನು ದುಃಖಪಟ್ಟೆನು; ಉಪವಾಸ ಮಾಡಿದೆನು. ನಾನು ಅವರಿಗೋಸ್ಕರ ಪ್ರಾರ್ಥಿಸಿದ್ದಕ್ಕೆ ಇದು ನನಗೆ ಪ್ರತಿಫಲವೇ?
14 ಅವರು ಅಸ್ವಸ್ಥರಾಗಿದ್ದಾಗ ಶೋಕವಸ್ತ್ರಗಳನ್ನು ಧರಿಸುತ್ತಿದ್ದೆನು. ಅವರನ್ನು ನನ್ನ ಸ್ನೇಹಿತರಂತೆಯೂ ಸಹೋದರರಂತೆಯೂ ಉಪಚರಿಸಿದೆನು. ತಾಯಿ ಸತ್ತದ್ದಕ್ಕಾಗಿ ದುಃಖಿಸುವವನಂತೆ ನಾನು ತಲೆಬಾಗಿ ಅತ್ತೆನು.
15 ಆದರೆ ನಾನು ಆಪತ್ತಿನಲ್ಲಿದ್ದಾಗ ಅವರು ನನ್ನನ್ನು ಗೇಲಿ ಮಾಡಿದರು, ಅವರು ನನ್ನ ನಿಜವಾದ ಸ್ನೇಹಿತರಲ್ಲ. ಅವರ ಪರಿಚಯವೂ ನನಗಿರಲಿಲ್ಲ. ಅವರು ನನ್ನ ಸುತ್ತಲೂ ಸೇರಿಬಂದು ನನ್ನ ಮೇಲೆ ಆಕ್ರಮಣ ಮಾಡಿದರು.
16 ಅವರು ಕೆಟ್ಟಮಾತಿನಿಂದ ನನ್ನನ್ನು ಹಾಸ್ಯಮಾಡಿದರು; ನನ್ನ ಮೇಲಿನ ಕೋಪದಿಂದ ಹಲ್ಲುಕಡಿದರು.
17 ನನ್ನ ಒಡೆಯನೇ, ಇವುಗಳನ್ನು ಇನ್ನೆಷ್ಟುಕಾಲ ನೋಡುತ್ತಾ ಇರುವೆ? ಅವರು ನನ್ನನ್ನು ನಾಶ ಮಾಡಲು ಪ್ರಯತ್ನಿಸುತ್ತಿದ್ದಾರೆ. ನನ್ನ ಪ್ರಾಣವನ್ನು ರಕ್ಷಿಸು. ಸಿಂಹಗಳಂತಿರುವ ಆ ದುಷ್ಟರಿಂದ ನನ್ನ ಪ್ರಿಯ ಪ್ರಾಣವನ್ನು ರಕ್ಷಿಸು.
18 ನಿನ್ನನ್ನು ಮಹಾಸಭೆಯಲ್ಲಿ ಸ್ತುತಿಸುವೆನು; ಬಲಿಷ್ಠರ ಸಮೂಹದಲ್ಲಿ ನಿನ್ನನ್ನು ಕೊಂಡಾಡುವೆನು.
19 ಸುಳ್ಳುಗಾರರಾದ ನನ್ನ ವೈರಿಗಳು ಇನ್ನು ಮೇಲೆ ಹಿಗ್ಗಲಾರರು. ನನ್ನ ವೈರಿಗಳು ತಮ್ಮ ಒಳಸಂಚುಗಳಿಗೆ ಖಂಡಿತವಾಗಿ ದಂಡಿಸಲ್ಪಡುವರು .
20 ನನ್ನ ವೈರಿಗಳು ಶಾಂತಿಸ್ಥಾಪನೆಗಾಗಿ ಯಾವ ಆಲೋಚನೆಗಳನ್ನೂ ಮಾಡುತ್ತಿಲ್ಲ. ಈ ದೇಶದಲ್ಲಿ ಶಾಂತಿಯಿಂದಿರುವ ಜನರಿಗೆ ಕೇಡುಮಾಡಲು ಅವರು ಒಳಸಂಚುಗಳನ್ನು ಮಾಡುತ್ತಿದ್ದಾರೆ.
21 ನನ್ನ ವೈರಿಗಳು ನನ್ನನ್ನು ದೂಷಿಸುವರು. ''ಆಹಾ! ನೀನು ಮಾಡುತ್ತಿರುವುದು ನಮಗೆ ಗೊತ್ತು!'' ಎನ್ನುವರು.
22 ಯೆಹೋವನೇ, ಇದೆಲ್ಲವನ್ನೂ ನೀನು ನೋಡಿರುವೆ, ಆದ್ದರಿಂದ ಸುಮ್ಮನಿರಬೇಡ ನನ್ನ ಕೈ ಬಿಡಬೇಡ.
23 ಎಚ್ಚರಗೊಳ್ಳು! ಎದ್ದೇಳು! ನನ್ನ ದೇವರೇ, ಯೆಹೋವನೇ, ನನಗಾಗಿ ಹೋರಾಡು; ನನಗೆ ನ್ಯಾಯವನ್ನು ದೊರಕಿಸು.
24 ನನ್ನ ದೇವರಾದ ಯೆಹೋವನೇ, ನಿನ್ನ ನೀತಿಗನುಸಾರವಾಗಿ ನನಗೆ ನ್ಯಾಯದೊರಕಿಸು. ಅವರು ನನ್ನನ್ನು ನೋಡಿ ನಗಲು ಆಸ್ಪದಕೊಡಬೇಡ.
25 ಅವರು, ''ಆಹಾ! ನಾವು ಬಯಸಿದ್ದನ್ನೇ ಪಡೆದೆವು!'' ಎಂದು ಹೇಳಲು ಅವಕಾಶಕೊಡಬೇಡ'' ನಾವು ಅವನನ್ನು ನಾಶ ಮಾಡಿದೆವು!'' ಎಂದು ಹೇಳಲು ಅವರಿಗೆ ಆಸ್ಪದಕೊಡಬೇಡ.
26 ನನ್ನ ವೈರಿಗಳೆಲ್ಲಾ ಅವಮಾನಕ್ಕೂ ನಾಚಿಕೆಗೂ ಗುರಿಯಾಗಲಿ. ನನಗೆ ಕೇಡಾದಾಗ ಅವರು ಸಂತೋಷಪಟ್ಟರು; ತಮ್ಮನ್ನು ನನಗಿಂತಲೂ ಉತ್ತಮರೆಂದು ಭಾವಿಸಿಕೊಂಡರು! ಆದ್ದರಿಂದ ಅವರನ್ನು ಅವಮಾನವೂ ನಾಚಿಕೆಯೂ ಆವರಿಸಿಕೊಳ್ಳಲಿ.
27 ನನಗೆ ನ್ಯಾಯ ದೊರೆಯಲೆಂದು ಅಪೇಕ್ಷಿಸುವವರು ಸಂತೋಷಪಡಲಿ. ''ಯೆಹೋವನು ಎಷ್ಟೋ

**ಭಲ್ಲೆ** ಈಟಿಯಂಥ ಒಂದು ಆಯುಧ.

ದೊಡ್ಡವನು! ಆತನು ತನ್ನ ಸೇವಕನಿಗೆ ಅತ್ಯುತ್ತಮ
ವಾದುದನ್ನೇ ಮಾಡಿದನು'' ಎಂದು ಅವರು
ಹೇಳುತ್ತಲೇ ಇರಲಿ.
28 ನಿನ್ನ ನೀತಿಯ ಕುರಿತು ನಾನು ಜನರಿಗೆ ಹೇಳುವೆನು;
ಪ್ರತಿದಿನವೂ ನಿನ್ನನ್ನು ಸ್ತುತಿಸುವೆನು.

## ಕೀರ್ತನೆ36

*ರಚನೆಗಾರ: ದಾವೀದ*

1 ದುಷ್ಟನು ಪಾಪದಿಂದ ಪ್ರಭಾವಿತನಾಗಿ, ''ನಾನು ದೇವ
ರಿಗೆ ಭಯಪಡುವುದೂ ಇಲ್ಲ. ಆತನನ್ನು ಗೌರವಿಸು
ವುದೂ ಇಲ್ಲ'' ಎಂದುಕೊಳ್ಳುವನು.
2 ಅವನು ತನ್ನನ್ನು ವಂಚಿಸಿಕೊಳ್ಳುವನು. ಅವನು ತನ್ನ
ತಪ್ಪುಗಳನ್ನು ಕಾಣುವುದೂ ಇಲ್ಲ, ಅವುಗಳಿಗಾಗಿ ಕ್ಷಮೆ
ಯನ್ನು ಕೇಳುವುದೂ ಇಲ್ಲ.
3 ಅವನ ಮಾತುಗಳು ಕೇವಲ ಸುಳ್ಳುಗಳಾಗಿವೆ. ಅವನು
ಜ್ಞಾನಿಯಾಗುವುದೂ ಇಲ್ಲ, ಒಳ್ಳೆಯದನ್ನು ಕಲಿತು
ಕೊಳ್ಳುವುದೂ ಇಲ್ಲ.
4 ರಾತ್ರಿಯಲ್ಲಿ, ಅವನು ಕೇಡನ್ನೇ ಆಲೋಚಿಸುವನು.
ಮರುದಿನ ಮುಂಜಾನೆ ಎದ್ದಾಗ, ಒಳ್ಳೆಯದನ್ನು
ಮಾಡದೆ ಕೇಡನ್ನು ಮಾಡಲು ಸಿದ್ಧನಾಗಿರುವನು.
5 ಯೆಹೋವನೇ, ನಿನ್ನ ಪ್ರೀತಿಯು ಆಕಾಶಕ್ಕಿಂತಲೂ
ಉನ್ನತವಾಗಿದೆ. ನಿನ್ನ ನಂಬಿಗಸ್ತಿಕೆಯು ಮೇಘಗಳಿ
ಗಿಂತಲೂ ಎತ್ತರವಾಗಿದೆ.
6 ನಿನ್ನ ನೀತಿಯು ಅತ್ಯುನ್ನತವಾದ ಬೆಟ್ಟಕ್ಕಿಂತಲೂ*
ಎತ್ತರವಾಗಿದೆ. ನಿನ್ನ ನ್ಯಾಯವು ಮಹಾಸಾಗರ
ಕ್ಕಿಂತಲೂ ಆಳವಾಗಿದೆ. ಯೆಹೋವನೇ, ಮನುಷ್ಯ
ರನ್ನೂ ಪ್ರಾಣಿಗಳನ್ನೂ ಕಾಪಾಡುವಾತನು ನೀನೇ.
7 ನಿನ್ನ ಶಾಶ್ವತವಾದ ಪ್ರೀತಿಗಿಂತ ಅಮೂಲ್ಯವಾದದ್ದು
ಬೇರೊಂದಿಲ್ಲ. ಜನರೂ ದೇವದೂತರೂ ನಿನ್ನನ್ನೇ
ಆಶ್ರಯಿಸಿಕೊಳ್ಳುವರು.
8 ನಿನ್ನ ಆಲಯದ ಸಮೃದ್ಧಿಯಿಂದ ಅವರು ನವ ಚೈತನ್ಯ
ವನ್ನು ಪಡೆದುಕೊಳ್ಳುವರು. ನಿನ್ನ ಶ್ರೇಷ್ಠ ನದಿಯಲ್ಲಿ
ಕುಡಿಯಲು ಅವರಿಗೆ ಆಸ್ಪದ ನೀಡು.
9 ಜೀವಬುಗ್ಗೆಯು ನಿನ್ನ ಬಳಿಯಿಂದ ಹರಿಯುವುದು!
ನಾವು ಬೆಳಕನ್ನು ನೋಡುವುದು ನಿನ್ನ ಬೆಳಕಿನಿಂದಲೇ.
10 ನಿನ್ನನ್ನು ಅರಿತುಕೊಂಡವರ ಮೇಲೆ ನಿನ್ನ ಪ್ರೀತಿಯು
ನೆಲೆಸಿರಲಿ. ಯಥಾರ್ಥವಂತವರಿಗೆ ಒಳ್ಳೆಯದನ್ನು
ಮಾಡು.
11 ಗರ್ವಿಷ್ಠರ ಬಲೆಗೆ ನನ್ನನ್ನು ಬೀಳಿಸಬೇಡ; ದುಷ್ಟರ
ಕೈಹಿಡಿತಕ್ಕೆ ನನ್ನನ್ನು ಸಿಕ್ಕಿಸಬೇಡ.
12 ''ದುಷ್ಟರು ಬಿದ್ದು ಜಜ್ಜಲ್ಪಟ್ಟದ್ದು ಇಲ್ಲಿಯೇ. ಅವರು
ಮತ್ತೆಂದಿಗೂ ಮೇಲೇಳುವುದಿಲ್ಲ'' ಎಂದು ಅವರ
ಸಮಾಧಿಯ ಮೇಲೆ ಬರೆಯಿಸು.

## ಕೀರ್ತನೆ37

*ರಚನೆಗಾರ: ದಾವೀದ*

1 ದುಷ್ಟರನ್ನು ನೋಡಿ ಉರಿಗೊಳ್ಳಬೇಡ. ಕೆಡುಕರನ್ನು
ಕಂಡು ಹೊಟ್ಟೆಕಿಚ್ಚುಪಡಬೇಡ.
2 ದುಷ್ಟರು ಹುಲ್ಲಿನಂತೆಯೂ ಸೊಪ್ಪಿನಂತೆಯೂ
ಬೇಗನೆ ಒಣಗಿಹೋಗುವರು.
3 ನೀನು ಯೆಹೋವನಲ್ಲಿ ಭರವಸವಿಟ್ಟು ಒಳ್ಳೆಯ
ಕಾರ್ಯಗಳನ್ನು ಮಾಡಿದರೆ, ದೀರ್ಘಕಾಲ
ಬದುಕುವೆ; ಭೂಮಿಯ ಅನೇಕ ಫಲಗಳನ್ನು
ಅನುಭವಿಸುವೆ.
4 ಯೆಹೋವನಿಗೆ ಸಂತೋಷದಿಂದ ಸೇವೆಮಾಡು.
ನಿನಗೆ ಬೇಕಾದುದನ್ನು ಆತನೇ ಕೊಡುವನು.
5 ಯೆಹೋವನನ್ನು ಆಶ್ರಯಿಸಿಕೊ. ಆತನಲ್ಲಿ ಭರವಸ
ವಿಡು. ನಿನಗೆ ಅಗತ್ಯವಾದದ್ದನ್ನು ಆತನೇ
ಮಾಡುವನು.
6 ನಿನ್ನ ನೀತಿಯೂ ನ್ಯಾಯವೂ ಮಧ್ಯಾಹ್ನದ ಸೂರ್ಯ
ನಂತೆ ಪ್ರಕಾಶಿಸಲಿ.
7 ಯೆಹೋವನಲ್ಲಿ ಭರವಸವಿಟ್ಟು ಆತನ ಸಹಾಯಕ್ಕಾಗಿ
ಕಾದುಕೊಂಡಿರು. ಕೆಡುಕರ ಅಭಿವೃದ್ಧಿಯನ್ನು ಕಂಡು
ಉರಿಗೊಳ್ಳಬೇಡ. ಕೆಡುಕರ ಕುಯುಕ್ತಿಗಳು ನೆರ
ವೇರಿದರೂ ಹೊಟ್ಟೇಕಿಚ್ಚುಪಡಬೇಡ.
8 ಕೋಪದಿಂದಿರಬೇಡ! ರೋಷದಿಂದಿರಬೇಡ! ಉರಿ
ಗೊಳ್ಳಬೇಡ! ಅವು ನಿನ್ನನ್ನು ಕೆಡುಕಿಗೆ ನಡೆಸುತ್ತವೆ.
9 ದುಷ್ಟರಾದರೋ ನಾಶವಾಗುವರು. ಯೆಹೋವನಲ್ಲಿ
ಮೊರೆಯಿಡುವವರಾದರೋ ವಾಗ್ದಾನ ಮಾಡಲ್ಪಟ್ಟ
ಭೂಮಿಯನ್ನು ಪಡೆದುಕೊಳ್ಳುವರು.
10 ಇನ್ನು ಸ್ವಲ್ಪ ಕಾಲದೊಳಗೆ ದುಷ್ಟರು ಇರುವುದೇ ಇಲ್ಲ.
ನೀನು ಅವರಿಗಾಗಿ ಹುಡುಕಿದರೂ ಅವರು
ಸಿಕ್ಕುವುದಿಲ್ಲ!
11 ವಾಗ್ದಾನ ಮಾಡಲ್ಪಟ್ಟ ಭೂಮಿಯನ್ನು ದೀನರು
ಪಡೆದುಕೊಳ್ಳುವರು; ಸಮಾಧಾನವನ್ನು
ಅನುಭವಿಸುವರು.
12 ದುಷ್ಟರು ನೀತಿವಂತರ ವಿರುದ್ಧ ದುರಾಲೋಚನೆ
ಗಳನ್ನು ಮಾಡುವರು. ನೀತಿವಂತರ ಮೇಲೆ ತಮ
ಗಿರುವ ಕೋಪದಿಂದ ಅವರು ಹಲ್ಲುಕಡಿಯುವರು.
13 ಆದರೆ ನಮ್ಮ ಒಡೆಯನು ಆ ದುಷ್ಟರನ್ನು ನೋಡಿ
ನಗುವನು. ಅವರಿಗೆ ಬರಲಿರುವ ಆಪತ್ತುಗಳು ಆತನಿಗೆ
ತಿಳಿದಿವೆ.
14 ಕೆಡುಕರು ಖಡ್ಗಗಳನ್ನು ಕೈಗೆತ್ತಿಕೊಳ್ಳುವರು; ತಮ್ಮ
ಬಿಲ್ಲುಗಳಿಗೆ ಬಾಣಗಳನ್ನು ಹೂಡಿ ಗುರಿಯಿಡುವರು.
ಅವರು ಬಡವರನ್ನೂ ಅಸಹಾಯಕರನ್ನೂ ಒಳ್ಳೆಯ
ವರನ್ನೂ ಯಥಾರ್ಥವಂತರನ್ನೂ ಕೊಲ್ಲ
ಬೇಕೆಂದಿದ್ದಾರೆ.

---

**ಅತ್ಯುನ್ನತವಾದ ಬೆಟ್ಟ** ಅಕ್ಷರಶಃ, ''ದೇವರ ಪರ್ವತ ಶ್ರೇಣಿ.''

15 ಆದರೆ ಅವರ ಬಿಲ್ಲುಗಳು ಮುರಿದು ಹೋಗುತ್ತವೆ. ಅವರ ಖಡ್ಗಗಳು ಅವರ ಹೃದಯಗಳಿಗೇ ನಾಟಿ ಕೊಳ್ಳುತ್ತವೆ.
16 ದುಷ್ಟನ ಶ್ರೀಮಂತಿಕೆಗಿಂತಲೂ ನೀತಿವಂತನ ಬಡ ತನವೇ ಮೇಲು.
17 ಯಾಕಂದರೆ ದುಷ್ಟರು ನಾಶವಾಗುವರು. ನೀತಿವಂತ ರನ್ನಾದರೋ ಯೆಹೋವನು ಪರಿಪಾಲಿಸುವನು.
18 ಯೆಹೋವನು ತನ್ನ ಭಕ್ತರನ್ನು ಅವರ ಜೀವಮಾನ ಪೂರ್ತಿ ಕಾಪಾಡುವನು. ಅವರ ಭೂಮಿಯು ಸದಾ ಕಾಲ ಅವರದೇ ಆಗಿರುವುದು.
19 ಆಪತ್ಕಾಲದಲ್ಲಿ ನೀತಿವಂತರು ನಾಶವಾಗುವುದಿಲ್ಲ. ಬರಗಾಲದಲ್ಲಿಯೂ ಅವರಿಗೆ ಕೊರತೆ ಯಿರುವುದಿಲ್ಲ.
20 ದುಷ್ಟರಾದರೊ ಯೆಹೋವನ ವೈರಿಗಳಾಗಿದ್ದಾರೆ. ಅವರು ನಾಶವಾಗುವರು. ಅವರ ಕಣಿವೆಗಳು ಒಣಗಿ ಸುಟ್ಟು ಹೋಗುತ್ತವೆ; ಅವರು ಹೊಗೆಯಂತೆ ಇಲ್ಲ ವಾಗುವರು.
21 ದುಷ್ಟನು ತಾನು ಮಾಡಿದ ಸಾಲವನ್ನು ತೀರಿಸುವುದಿಲ್ಲ. ನೀತಿವಂತನಾದರೊ ಬೇರೆಯವರಿಗೆ ಉದಾರವಾಗಿ ಕೊಡುವನು.
22 ನೀತಿವಂತರು ಆಶೀರ್ವದಿಸಿದರೆ, ವಾಗ್ದಾನ ಮಾಡ ಲ್ಪಟ್ಟ ಭೂಮಿಯನ್ನು ಜನರು ಪಡೆದುಕೊಳ್ಳುವರು. ಆದರೆ ಅವರು ಶಪಿಸಿದರೆ, ಜನರು ನಾಶವಾಗುವರು.
23 ಯೆಹೋವನು ನೀತಿವಂತನನ್ನು ತನ್ನ ಮಾರ್ಗದಲ್ಲಿ ನಡೆಸುವನು ಮತ್ತು ಅವನನ್ನು ಮೆಚ್ಚಿಕೊಳ್ಳುವನು.
24 ಅವನು ಎಡವಿದರೂ ಬೀಳುವುದಿಲ್ಲ; ಯಾಕಂದರೆ ಯೆಹೋವನು ಅವನ ಕೈಹಿಡಿದುಕೊಂಡಿದ್ದಾನೆ.
25 ನಾನು ಬಾಲಕನಾಗಿದ್ದೆನು, ಈಗ ವೃದ್ಧನಾಗಿದ್ದೇನೆ. ನೀತಿವಂತರನ್ನು ದೇವರು ತೊರೆದುಬಿಟ್ಟಿದ್ದನ್ನಾಗಲೀ ಅವನ ಮಕ್ಕಳು ಆಹಾರಕ್ಕಾಗಿ ಬೇಡುವುದನ್ನಾಗಲಿ ನಾನೆಂದೂ ಕಾಣಲಿಲ್ಲ.
26 ನೀತಿವಂತನು ಬೇರೆಯವರಿಗೆ ಉದಾರವಾಗಿ ಕೊಡು ವನು. ಅವನ ಮಕ್ಕಳು ಆಶೀರ್ವಾದ ಹೊಂದುವರು.
27 ನೀನು ಕೆಟ್ಟದ್ದನ್ನು ಮಾಡದೆ ಒಳ್ಳೆಯದನ್ನೇ ಮಾಡಿದರೆ ಸದಾಕಾಲ ಬದುಕುವೆ.
28 ಯೆಹೋವನು ನ್ಯಾಯವನ್ನು ಪ್ರೀತಿಸುವನು. ಆತನು ತನ್ನ ಭಕ್ತರನ್ನು ತೊರೆದುಬಿಡದೆ ಅವರನ್ನು ಯಾವಾ ಗಲೂ ಕಾಪಾಡುವನು. ದುಷ್ಟರನ್ನಾದರೋ ಆತನು ನಾಶ ಮಾಡುವನು.
29 ದೇವರು ವಾಗ್ದಾನ ಮಾಡಿದ ಭೂಮಿಯನ್ನು ನೀತಿ ವಂತರು ಪಡೆದುಕೊಂಡು ಅಲ್ಲಿ ಸದಾಕಾಲ ವಾಸಿಸುವರು.
30 ನೀತಿವಂತನು ಒಳ್ಳೆಯ ಬುದ್ಧಿವಾದ ಹೇಳುವನು. ಅವನ ತೀರ್ಮಾನಗಳು ನ್ಯಾಯಬದ್ಧವಾಗಿರುತ್ತವೆ.
31 ಯೆಹೋವನ ಉಪದೇಶವು ನೀತಿವಂತನ ಹೃದಯ ದಲ್ಲಿರುತ್ತದೆ. ಅವನು ನೀತಿ ಮಾರ್ಗದಲ್ಲಿ ನಡೆಯುವನು.
32 ಕೆಡುಕರಾದರೋ ನೀತಿವಂತರಿಗೆ ಕೇಡುಮಾಡಲು ಹೊಂಚುಹಾಕುವರು.
33 ಆದರೆ ಯೆಹೋವನು ನೀತಿವಂತರನ್ನು ತೊರೆದು ಬಿಡುವುದಿಲ್ಲ. ನೀತಿವಂತರಿಗೆ ಅಪರಾಧಿಗಳೆಂದು ತೀರ್ಪಾಗಲು ಆತನು ಬಿಡುವುದಿಲ್ಲ.
34 ಯೆಹೋವನನ್ನೇ ನಿರೀಕ್ಷಿಸಿಕೊಂಡು ಆತನ ಮಾರ್ಗ ವನ್ನು ಅನುಸರಿಸಿರಿ. ಆಗ ಆತನು ನಿಮ್ಮನ್ನು ಜಯ ಶಾಲಿಗಳನ್ನಾಗಿ ಮಾಡುವನು; ದೇವರು ವಾಗ್ದಾನ ಮಾಡಿದ ಭೂಮಿಯನ್ನು ನೀವು ಪಡೆದುಕೊಳ್ಳುವಿರಿ.
35 ಮಹಾದುಷ್ಟನನ್ನು ನಾನು ನೋಡಿದ್ದೇನೆ. ಅವನು ಮಹಾವೃಕ್ಷದಂತೆ ಬಲಿಷ್ಠನಾಗಿದ್ದನು.
36 ಸ್ವಲ್ಪಕಾಲದ ಮೇಲೆ ಅವನು ಇಲ್ಲವಾದನು. ನಾನು ಅವನಿಗಾಗಿ ಹುಡುಕಿದರೂ ಅವನು ಸಿಕ್ಕಲಿಲ್ಲ.
37 ಪವಿತ್ರರನ್ನೂ ಯಥಾರ್ಥರನ್ನೂ ಗಮನಿಸು. ಶಾಂತಿ ಪ್ರಿಯರು ಅನೇಕ ಸಂತಾನಗಳನ್ನು ಹೊಂದಿ ಕೊಳ್ಳುವರು.
38 ಧರ್ಮಶಾಸ್ತ್ರವನ್ನು ಉಲ್ಲಂಘಿಸುವವರು ಸಂಪೂರ್ಣ ವಾಗಿ ನಾಶವಾಗುವರು. ಅವರ ಮಕ್ಕಳೂ ನಾಶ ವಾಗುವರು.
39 ಯೆಹೋವನು ನೀತಿವಂತರನ್ನು ಕಾಪಾಡುತ್ತಾನೆ. ಅವರು ಆಪತ್ತಿನಲ್ಲಿರುವಾಗ ಆತನೇ ಅವರಿಗೆ ಆಶ್ರಯ ಸ್ಥಾನವಾಗಿದ್ದಾನೆ.
40 ಯೆಹೋವನು ನೀತಿವಂತರಿಗೆ ಸಹಾಯಕನಾಗಿ ಅವರನ್ನು ರಕ್ಷಿಸುತ್ತಾನೆ. ನೀತಿವಂತರು ಆತನನ್ನು ಆಶ್ರಯಿಸಿಕೊಂಡಾಗ ಆತನು ಅವರನ್ನು ದುಷ್ಟರಿಂದ ತಪ್ಪಿಸಿ ಕಾಪಾಡುವನು.

## ಕೀರ್ತನೆ 38

*ಜ್ಞಾಪಕಾರ್ಥ ನೈವೇದ್ಯ ಸಮರ್ಪಣೆಯ ಹಾಡು.*

*ರಚನೆಗಾರ: ದಾವೀದ*

1 ಯೆಹೋವನೇ, ಕೋಪದಿಂದ ನನ್ನನ್ನು ಖಂಡಿಸ ಬೇಡ. ರೋಷದಿಂದ ನನ್ನನ್ನು ಶಿಸ್ತುಗೊಳಿಸಬೇಡ.
2 ನಿನ್ನಿಂದ ನನಗೆ ನೋವಾಗಿದೆ. ನಿನ್ನ ಬಾಣಗಳು ನನಗೆ ನಾಟಿಕೊಂಡಿವೆ.
3 ನೀನು ಶಿಕ್ಷಿಸಿದ್ದರಿಂದ ನನ್ನ ಇಡೀ ದೇಹ ಹುಣ್ಣಾಗಿದೆ. ನಾನು ಪಾಪಮಾಡಿದ್ದರಿಂದ ನನ್ನ ಎಲುಬುಗಳೆಲ್ಲ ನೋಯುತ್ತಿವೆ.
4 ನಾನು ಅಪರಾಧಿಯಾಗಿದ್ದೇನೆ. ನನ್ನ ಅಪರಾಧಗಳು ನನ್ನ ಭುಜಗಳ ಮೇಲೆ ಭಾರವಾದ ಹೊರೆಯಂತಿವೆ.

5 ನಾನೊಂದು ಮೂರ್ಖ ಕೆಲಸವನ್ನು ಮಾಡಿದೆನು. ಈಗ ನನಗೆ ಕೀವು ಸೋರಿ ದುರ್ವಾಸನೆಯಿಂದಿರುವ ಹುಣ್ಣುಗಳಾಗಿವೆ.
6 ನಾನು ಬಾಗಿ ಕುಗ್ಗಿಹೋಗಿದ್ದೇನೆ. ನಾನು ದಿನವೆಲ್ಲಾ ನಿರುತ್ಸಾಹನಾಗಿದ್ದೇನೆ.
7 ನನಗೆ ಜ್ವರವಿದೆ, ನನ್ನ ಇಡೀ ದೇಹ ನೋಯುತ್ತಿದೆ.
8 ನನಗೆ ಬಹಳ ನೋವಿರುವುದರಿಂದ ಜೋಮು ಹಿಡಿದಂತಿದೆ. ಹೃದಯದ ವೇದನೆಯಿಂದ ಅರಚಿಕೊಳ್ಳುತ್ತಾ ಇದ್ದೇನೆ.
9 ನನ್ನ ಒಡೆಯನೇ, ನೀನು ನನ್ನ ನರಳಾಟವನ್ನು ಕೇಳಿರುವೆ. ನನ್ನ ನಿಟ್ಟುಸಿರುಗಳು ನಿನಗೆ ಮರೆಯಾಗಿಲ್ಲ.
10 ನನ್ನ ಹೃದಯದ ವೇದನೆಯಿಂದ ಶಕ್ತಿಯು ಕುಂದಿಹೋಗಿದೆ; ನನ್ನ ದೃಷ್ಟಿಯು ಹಿಂಗಿಹೋಗಿದೆ.
11 ನಾನು ಅಸ್ವಸ್ಥನಾಗಿರುವುದರಿಂದ ನನ್ನ ಸ್ನೇಹಿತರಾಗಲೀ ನೆರೆಯವರಾಗಲೀ ನನ್ನನ್ನು ನೋಡಲು ಬರುವುದಿಲ್ಲ. ನನ್ನ ಕುಟುಂಬದವರು ನನ್ನ ಸಮೀಪಕ್ಕೂ ಬರುವುದಿಲ್ಲ.
12 ನನ್ನ ವೈರಿಗಳು ನನಗೆ ಬಲೆಗಳನ್ನು ಒಡ್ಡಿದ್ದಾರೆ; ನನ್ನ ನಾಶನದ ಕುರಿತು ಅವರು ಮಾತಾಡುತ್ತಿದ್ದಾರೆ; ದಿನವೆಲ್ಲಾ ಕುತಂತ್ರವನ್ನು ಮಾಡುತ್ತಿದ್ದಾರೆ.
13 ಆದರೆ ನಾನು ಕಿವುಡನಂತೆ ಕೇಳದವನಾಗಿದ್ದೇನೆ. ಮೂಕನಂತೆ ಮಾತಾಡದವನಾಗಿದ್ದೇನೆ.
14 ನಾನು ಕಿವಿಕೇಳಿಸದವನಂತೆಯೂ ಪ್ರತ್ಯುತ್ತರ ಕೊಡಲಾರದವನಂತೆಯೂ ಆದೆನು.
15 ಯೆಹೋವನೇ, ನಿನ್ನನ್ನೇ ನಿರೀಕ್ಷಿಸಿಕೊಂಡಿದ್ದೇನೆ. ನನ್ನ ಒಡೆಯನಾದ ದೇವರೇ, ನನಗೆ ಉತ್ತರ ನೀಡು.
16 ನಾನು ಏನೇ ಹೇಳಿದರೂ ವೈರಿಗಳು ನನ್ನನ್ನು ನೋಡಿ ನಗುವರು. ನನ್ನ ಕಾಯಿಲೆಯು ಪಾಪದ ಫಲವೆಂದು ಹೇಳುವರು.
17 ನಾನು ಅಪರಾಧಿಯೆಂದು ನನಗೆ ಗೊತ್ತಿದೆ; ನನ್ನ ನೋವನ್ನು ಮರೆಯಲಾರೆ.
18 ನನ್ನ ಅಪರಾಧಗಳನ್ನು ನಿನಗೆ ಅರಿಕೆ ಮಾಡಿಕೊಂಡಿದ್ದೇನೆ. ನನ್ನ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟಿದ್ದೇನೆ.
19 ನನ್ನ ವೈರಿಗಳು ಚುರುಕಾಗಿಯೂ ಬಲಶಾಲಿಗಳಾಗಿಯೂ ಇದ್ದಾರೆ. ಅವರು ಎಷ್ಟೋ ಸುಳ್ಳುಗಳನ್ನು ಹೇಳಿದರು.
20 ನಾನು ಉಪಕಾರವನ್ನು ಮಾಡಿದ್ದರೂ ನನ್ನ ವೈರಿಗಳು ನನಗೆ ಅಪಕಾರವನ್ನೇ ಮಾಡುವರು. ನಾನು ಒಳ್ಳೆಯದನ್ನು ಮಾಡಬೇಕೆಂದರೂ ಅವರು ನನ್ನನ್ನು ವಿರೋಧಿಸುತ್ತಾರೆ.
21 ಯೆಹೋವನೇ, ನನ್ನನ್ನು ಕೈಬಿಡಬೇಡ! ನನ್ನ ದೇವರೇ, ನನ್ನ ಸಮೀಪದಲ್ಲೇ ಇರು!
22 ಯೆಹೋವನೇ, ನನ್ನ ರಕ್ಷಕನೇ, ಬೇಗನೆ ಬಂದು ನನಗೆ ಸಹಾಯಮಾಡು!

## ಕೀರ್ತನೆ39

*ರಚನೆಗಾರ: ದಾವೀದ*

1 ‘‘ನಾನು ಜಾಗರೂಕನಾಗಿ ಮಾತಾಡುವೆ. ನನ್ನ ನಾಲಿಗೆ ನನ್ನನ್ನು ಪಾಪಕ್ಕೆ ಸಿಕ್ಕಿಸದಂತೆ ನೋಡಿಕೊಳ್ಳುವೆ. ದುಷ್ಟರ ಮಧ್ಯದಲ್ಲಿ ಬಾಯಿಮುಚ್ಚಿಕೊಂಡಿರುವೆ’’ ಎಂದುಕೊಂಡೆನು.
2 ನಾನು ಮೌನವಾಗಿದ್ದೆನು. ಒಳ್ಳೆಯದನ್ನೂ ಹೇಳದೆ ಸುಮ್ಮನಿದ್ದೆನು. ಆದರೆ ನನ್ನ ವೇದನೆಯು ಹೆಚ್ಚಾಯಿತು.
3 ನಾನು ಬಹು ಕೋಪಗೊಂಡಿದ್ದೆ. ಅದರ ಕುರಿತು ಆಲೋಚಿಸಿದಷ್ಟೂ ಕೋಪವು ಅಧಿಕವಾಯಿತು. ಆಗ ನಾನು ಬಾಯಿತೆರೆದು,
4 ಯೆಹೋವನೇ, ನನ್ನ ಗತಿಯನ್ನು ತಿಳಿಸು! ನನ್ನ ಈ ಅಲ್ಪ ಜೀವಿತವು ಇನ್ನೆಷ್ಟು ಕಾಲವಿರುವುದು? ನಾನೆಷ್ಟು ಕಾಲ ಬದುಕುವೆ?
5 ನೀನು ನನಗೆ ಕೇವಲ ಅಲ್ಪಾಯುಷ್ಯವನ್ನು ಕೊಟ್ಟಿರುವೆ. ನನ್ನ ಅಲ್ಪ ಜೀವಿತವು ನಿನ್ನ ದೃಷ್ಟಿಯಲ್ಲಿ ಗಣನೆಗೂಬಾರದು. ಮನುಷ್ಯನ ಜೀವಿತವು ಕೇವಲ ಮೋಡದಂತೆ ಕ್ಷಣಿಕವಾಗಿದೆ. ಯಾವನೂ ಸದಾಕಾಲ ಬದುಕುವುದಿಲ್ಲ!
6 ನಮ್ಮ ಜೀವಿತವು ಕೇವಲ ಕನ್ನಡಿಯ ಪ್ರತಿಬಿಂಬದಂತಿದೆ. ನಾವು ಗಡಿಬಿಡಿಯಿಂದ ಆಸ್ತಿಯನ್ನು ಕೂಡಿಸಿಟ್ಟುಕೊಳ್ಳುತ್ತೇವೆ. ನಾವು ಸತ್ತ ಮೇಲೆ ಅವು ಯಾರ ಪಾಲಾಗುವುದೊ ನಮಗೆ ತಿಳಿಯದು.
7 ಯೆಹೋವನೇ, ನನಗಿರುವ ನಿರೀಕ್ಷೆ ಯಾವುದು? ನನ್ನ ನಿರೀಕ್ಷೆಯು ನೀನೇ.
8 ನನ್ನ ಎಲ್ಲಾ ಅಪರಾಧಗಳಿಂದ ನನ್ನನ್ನು ಬಿಡಿಸು. ಮೂರ್ಖರ ನಿಂದೆಗೆ ನನ್ನನ್ನು ಗುರಿಮಾಡಬೇಡ.
9 ನಾನು ಬಾಯಿತೆರೆದು ಮಾತಾಡುವುದಿಲ್ಲ. ನೀನು ನ್ಯಾಯಕ್ಕೆ ತಕ್ಕಂತೆ ಮಾಡಿರುವೆ.
10 ನನ್ನನ್ನು ಶಿಕ್ಷಿಸುವುದನ್ನು ನಿಲ್ಲಿಸು. ಇಲ್ಲವಾದರೆ, ನಾನು ಸತ್ತೇ ಹೋಗುವೆನು.
11 ನೀನು ಅಪರಾಧಗಳಿಗೆ ತಕ್ಕಂತೆ ಜನರನ್ನು ದಂಡಿಸಿ, ನಿನ್ನ ಜೀವಮಾರ್ಗವನ್ನು ಅವರಿಗೆ ಉಪದೇಶಿಸುವೆ. ನುಸಿಯು ಬಟ್ಟೆಯನ್ನು ತಿಂದುಬಿಡುವಂತೆ ಜನರಿಗೆ ಇಷ್ಟವಾದವುಗಳನ್ನು ನೀನು ನಾಶಮಾಡುವೆ. ಹೌದು, ನಮ್ಮ ಜೀವಿತಗಳು ಬೇಗನೆ ಕಣ್ಮರೆಯಾಗುವ ಒಂದು ಚಿಕ್ಕ ಮೋಡದಂತಿವೆ.
12 ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳು! ನನ್ನ ಮೊರೆಗೆ ಕಿವಿಗೊಡು! ನನ್ನ ಕಣ್ಣೀರನ್ನು ನೋಡು!

ನಾನು ಈ ಜೀವಿತವನ್ನು ಕೇವಲ ಒಬ್ಬ ಪ್ರಯಾಣಿಕ
ನಂತೆ ನಿನ್ನೊಂದಿಗೆ ಸಾಗಿಸುತ್ತಿರುವೆ. ನನ್ನ ಎಲ್ಲಾ
ಪೂರ್ವಿಕರಂತೆ, ನಾನು ಇಲ್ಲಿ ಕೇವಲ ಸ್ವಲ್ಪಕಾಲ
ಜೀವಿಸುವೆನು.
13 ನೀನು ಕೋಪದಿಂದ ನನ್ನ ಕಡೆಗೆ ನೋಡಬೇಡ!
ಸಾಯುವುದಕ್ಕಿಂತ ಮೊದಲು ನನಗೆ ಸಂತೋಷವಿರಲಿ.
ಇನ್ನು ಸ್ವಲ್ಪಕಾಲದಲ್ಲಿ ನಾನು ಇಲ್ಲವಾಗುವೆನು!

## ಕೀರ್ತನೆ 40

*ರಚನೆಗಾರ: ದಾವೀದ*

1 ನಾನು ಯೆಹೋವನಿಗೋಸ್ಕರ ತಾಳ್ಮೆಯಿಂದ ನಿರೀಕ್ಷಿ
ಸಿದೆನು; ಆತನು ನನ್ನ ಮೊರೆಗೆ ಕಿವಿಗೊಟ್ಟು ಕೇಳಿದನು.
2 ಆತನು ನನ್ನನ್ನು ನಾಶನದ ಗುಂಡಿಯೊಳಗಿಂದ*
ಎತ್ತಿದನು. ಆತನು ನನ್ನನ್ನು ಕೆಸರಿನ ಸ್ಥಳದಿಂದ*
ಮೇಲೆತ್ತಿ ಬಂಡೆಯ ಮೇಲಿರಿಸಿದನು; ದೃಢವಾಗಿ ಹೆಜ್ಜೆ
ಯಿಡುವಂತೆ ಮಾಡಿದನು.
3 ಆತನು ನನ್ನ ಬಾಯಲ್ಲಿ ಹೊಸ ಕೀರ್ತನೆಯನ್ನು
ಹುಟ್ಟಿಸಿದ್ದಾನೆ. ಅದು ನನ್ನ ದೇವರ ಸ್ತುತಿಗೀತೆ. ನನಗೆ
ಸಂಭವಿಸಿದವುಗಳನ್ನು ಅನೇಕರು ನೋಡಿ ಯೆಹೋ
ವನಲ್ಲಿ ಭರವಸವಿಟ್ಟು ಆತನನ್ನು ಆರಾಧಿಸುವರು.
4 ಯಾವನು ಯೆಹೋವನಲ್ಲಿ ಭರವಸವಿಟ್ಟಿದ್ದಾನೊ
ಅವನೇ ಧನ್ಯನು. ಸಹಾಯಕ್ಕಾಗಿ ವಿಗ್ರಹಗಳ ಕಡೆಗೂ
ಸುಳ್ಳು ದೇವರುಗಳ ಕಡೆಗೂ ತಿರುಗಿಕೊಳ್ಳದವನೇ
ಭಾಗ್ಯವಂತನು.
5 ಯೆಹೋವನೇ, ನಮ್ಮ ದೇವರೇ, ನೀನು ಅನೇಕ ಮಹ
ತ್ಕಾರ್ಯಗಳನ್ನು ಮಾಡಿರುವೆ! ನಮ್ಮ ವಿಷಯದಲ್ಲಿ
ನಿನಗೆ ಅತಿಶಯವಾದ ಆಲೋಚನೆಗಳಿವೆ. ಅವು
ಗಳನ್ನು ವಿವರಿಸಿ ಹೇಳಲು ಸಾಧ್ಯವಿಲ್ಲ; ಅವು
ಅಸಂಖ್ಯಾತವಾಗಿವೆ.
6 ನಾನು ಗ್ರಹಿಸಿಕೊಂಡಿದ್ದೇನಂದರೆ, ನಿನಗೆ ಯಜ್ಞ
ಗಳಾಗಲೀ ಧಾನ್ಯಸಮರ್ಪಣೆಗಳಾಗಲೀ ಸರ್ವಾಂಗ
ಹೋಮಗಳಾಗಲೀ ಪಾಪಪರಿಹಾರಕ ಯಜ್ಞಗ
ಳಾಗಲೀ ನಿನಗೆ ಬೇಕಿಲ್ಲ.
7 ಆದ್ದರಿಂದ ನಾನು, ''ಇಗೋ, ಬರುತ್ತಿದ್ದೇನೆ. ನನ್ನ
ವಿಷಯವಾಗಿ ಗ್ರಂಥದಲ್ಲಿ ಇದನ್ನು ಬರೆಯಲಾಗಿದೆ.
8 ನನ್ನ ದೇವರೇ, ನಿನ್ನ ಚಿತ್ತಾನುಸಾರವಾಗಿ ಮಾಡು
ತ್ತೇನೆ. ನಿನ್ನ ಉಪದೇಶಗಳನ್ನು ನನ್ನ ಹೃದಯದಲ್ಲಿಟ್ಟು
ಕೊಂಡಿದ್ದೇನೆ'' ಅಂದೆನು.

**ನಾಶನದ ಗುಂಡಿಯೊಳಗಿಂದ** ''ಸಿಯೊಲ್''ಗೆ ಮತ್ತೊಂದು ಹೆಸರು ''ಮರಣದ ಸ್ಥಳ.''

**ಕೆಸರಿನ ಸ್ಥಳದಿಂದ** ಅನೇಕ ಪುರಾತನ ಕಥೆಗಳಲ್ಲಿ ಮರಣದ ಸ್ಥಳವಾದ ಸಿಯೊಲ್ ಸುತ್ತಲೆಲ್ಲಾ ಕೆಸರಿನಿಂದ ಕೂಡಿರುವ ಕತ್ತಲಾದ ಸ್ಥಳವೆಂದು ಹೇಳಲಾಗಿದೆ. ಸಾಮಾನ್ಯವಾಗಿ ಸತ್ತಜನರನ್ನು ನೆಲದೊಳಗೆ ಹೂಳುವುದೇ ಇದಕ್ಕೆ ಕಾರಣ.

9 ವಿಜಯದ ಶುಭವಾರ್ತೆಯನ್ನು ನಾನು ಮಹಾ ಸಭೆ
ಯಲ್ಲಿ ತಿಳಿಸಿದೆನು. ಯೆಹೋವನೇ, ನಾನು ಬಾಯಿ
ಮುಚ್ಚಿಕೊಂಡಿರುವುದಿಲ್ಲ ಅದು ನಿನಗೆ ತಿಳಿದೇ ಇದೆ.
10 ನಿನ್ನ ನೀತಿಕಾರ್ಯಗಳ ಕುರಿತು ನಾನು ಹೇಳಿದೆನು.
ಅವುಗಳನ್ನು ನನ್ನ ಹೃದಯದಲ್ಲಿ ಬಚ್ಚಿಟ್ಟುಕೊಳ್ಳಲಿಲ್ಲ.
ನಿನ್ನ ನಂಬಿಗಸ್ತಿಕೆಯನ್ನೂ ರಕ್ಷಣೆಯನ್ನು ನಾನು
ಅವರಿಗೆ ತಿಳಿಸುವೆನು. ನಿನ್ನ ಪ್ರೀತಿಯನ್ನೂ ನಿನ್ನ ಸತ್ಯತೆ
ಯನ್ನೂ ಮಹಾ ಸಭೆಯಲ್ಲಿ ಹೇಳುವೆನು.
11 ಯೆಹೋವನೇ, ನಿನ್ನ ಕರುಣೆಯನ್ನು ನನಗೆ ದೂರ
ಮಾಡಬೇಡ. ನಿನ್ನ ದಯೆಯೂ ನಂಬಿಗಸ್ತಿಕೆಯೂ
ನನ್ನನ್ನು ಸಂರಕ್ಷಿಸಲಿ.''
12 ದುಷ್ಟರು ನನ್ನನ್ನು ಸುತ್ತುಗಟ್ಟಿದ್ದಾರೆ ಅವರು ಅಸಂಖ್ಯಾ
ತರಾಗಿದ್ದಾರೆ. ನನ್ನ ಪಾಪಗಳು ನನ್ನನ್ನು ಹಿಡಿದಿರುವು
ದರಿಂದ ಅವುಗಳಿಂದ ತಪ್ಪಿಸಿಕೊಳ್ಳಲಾರೆ. ನನ್ನ ತಲೆಯ
ಕೂದಲುಗಳಿಗಿಂತಲೂ ನನ್ನ ಪಾಪಗಳು ಹೆಚ್ಚಾಗಿವೆ.
ನಾನು ಧೈರ್ಯವನ್ನು ಕಳೆದುಕೊಂಡಿರುವೆ.
13 ಯೆಹೋವನೇ, ನನ್ನನ್ನು ರಕ್ಷಿಸು! ಬೇಗನೆ ಬಂದು
ನನ್ನನ್ನು ಕಾಪಾಡು!
14 ಆ ದುಷ್ಟರು ನನ್ನನ್ನು ಕೊಲ್ಲಬೇಕೆಂದಿದ್ದಾರೆ.
ಯೆಹೋವನೇ, ಅವರಿಗೆ ನಾಚಿಕೆಯನ್ನೂ ನಿರಾಶೆ
ಯನ್ನೂ ಬರಮಾಡು. ನನಗೆ ಕೇಡುಮಾಡಬೇಕೆಂದಿ
ರುವ ಅವರು ನಾಚಿಕೆಯಿಂದ ಓಡಿ ಹೋಗಲಿ!
15 ನನ್ನನ್ನು ಗೇಲಿಮಾಡುವ ಆ ದುಷ್ಟರು ತಮಗಾಗುವ
ಅವಮಾನದಿಂದ ಗಾಬರಿಗೊಳ್ಳಲಿ!
16 ಆದರೆ ನಿನ್ನ ದರ್ಶನವನ್ನು ಬೇಡುವವರು ಉಲ್ಲಾಸ
ದಿಂದ ಸಂತೋಷಪಡಲಿ. ನಿನ್ನ ರಕ್ಷಣೆಯಲ್ಲಿ ಆನಂದಿ
ಸುವವರು, ''ಯೆಹೋವನಿಗೆ ಸ್ತೋತ್ರವಾಗಲಿ''
ಎಂದು ಯಾವಾಗಲೂ ಹೇಳಲಿ.
17 ಒಡೆಯನೇ, ನಾನು ಕೇವಲ ಬಡವನೂ ಅಸಹಾ
ಯಕನೂ ಆಗಿರುವೆ. ನನಗೆ ಸಹಾಯಮಾಡಿ ನನ್ನನ್ನು
ರಕ್ಷಿಸು. ನನ್ನ ದೇವರೇ, ತಡಮಾಡಬೇಡ.

## ಕೀರ್ತನೆ 41

*ರಚನೆಗಾರ: ದಾವೀದ*

1 ಯಾವನು ಬಡಜನರನ್ನು* ಅಭಿವೃದ್ಧಿಪಡಿಸುವನೊ
ಅವನೇ ಧನ್ಯನು. ಯೆಹೋವನು ಅವನನ್ನು ಆಪತ್ಕಾ
ಲದಲ್ಲಿ ರಕ್ಷಿಸುವನು.
2 ಯೆಹೋವನು ಅವನ ಪ್ರಾಣವನ್ನು ಕಾಪಾಡಿ
ರಕ್ಷಿಸುವನು. ಅವನು ಭೂಮಿಯ ಮೇಲೆ ಧನ್ಯನೆನಸಿ
ಕೊಳ್ಳುವನು. ಯೆಹೋವನೇ, ಅವನನ್ನು ಶತ್ರುಗಳ
ಕೈಗೆ ಕೊಡಬೇಡ.

**ಬಡಜನರು … ಪಡೆದುಕೊಳ್ಳುವನು** ಅಥವಾ, ''ಬಡಜನರಿಗೆ ಉಪದೇಶಿಸುವವನು ಧನ್ಯನೇ ಸರಿ.''

3 ಅವನು ಕಾಯಿಲೆಯಿಂದ ಹಾಸಿಗೆಯಲ್ಲಿರುವಾಗ ಯೆಹೋವನು ಅವನಿಗೆ ಬಲವನ್ನು ಕೊಡುವನು. ಅವನು ಕಾಯಿಲೆಯಿಂದ ಹಾಸಿಗೆಯಲ್ಲಿದ್ದರೂ ಯೆಹೋವನು ಅವನನ್ನು ಗುಣಪಡಿಸುವನು!

4 ನಾನು ಆತನಿಗೆ, ''ಯೆಹೋವನೇ, ನನಗೆ ದಯೆ ತೋರು. ನಾನು ನಿನಗೆ ವಿರೋಧವಾಗಿ ಪಾಪಮಾಡಿದ್ದೇನೆ, ಆದರೂ ನನ್ನನ್ನು ಕ್ಷಮಿಸಿ ಗುಣಪಡಿಸು'' ಎಂದು ಹೇಳಿದೆ.

5 ನನ್ನ ಶತ್ರುಗಳು ನನ್ನನ್ನು ದೂಷಿಸುತ್ತಾ ''ಅವನು ಯಾವಾಗ ಸಾಯುತ್ತಾನೆ, ಅವನ ಹೆಸರು ಯಾವಾಗ ಅಳಿದು ಹೋಗುತ್ತದೆ'' ಎಂದು ಹೇಳುತ್ತಿದ್ದಾರೆ.

6 ನನ್ನನ್ನು ನೋಡಲು ಬಂದವರು ಕಪಟದ ಮಾತಾಡುವರು; ಅವರು ನನ್ನ ಸಮಾಚಾರವನ್ನು ಸಂಗ್ರಹಿಸಿಕೊಂಡು ಸುಳ್ಳುಸುದ್ದಿಯನ್ನು ಹಬ್ಬಿಸುವರು.

7 ನನ್ನ ವೈರಿಗಳು ನನಗೆ ವಿರೋಧವಾಗಿ ಗುಟ್ಟಾಗಿ ಮಾತಾಡಿಕೊಳ್ಳುವರು; ನನಗೆ ಕೇಡು ಮಾಡಲು ಆಲೋಚಿಸುವರು.

8 ''ಅವನು ಯಾವುದೊ ತಪ್ಪು ಮಾಡಿರುವುದರಿಂದ ಅವನಿಗೆ ಕಾಯಿಲೆ ಬಂದಿದೆ, ಅವನಿಗೆ ಗುಣವಾಗುವುದೇ ಇಲ್ಲ'' ಎಂದು ಅವರು ಹೇಳುತ್ತಾರೆ.

9 ನನ್ನ ಆಪ್ತಸ್ನೇಹಿತನೊಂದಿಗೆ ಊಟ ಮಾಡುತ್ತಿದ್ದೆನು; ಅವನಲ್ಲಿ ಭರವಸವಿಟ್ಟಿದ್ದೆನು, ಆದರೆ ಈಗ ಅವನೇ ನನಗೆ ವಿರೋಧವಾಗಿ ಎದ್ದಿದ್ದಾನೆ.

10 ಯೆಹೋವನೇ, ದಯವಿಟ್ಟು ನನಗೆ ದಯೆತೋರು; ನನ್ನನ್ನು ಏಳಮಾಡು; ಆಗ ನಾನು ಅವರಿಗೆ ಮುಯ್ಯಿ ತೀರಿಸುವೆನು.

11 ನನಗೆ ಕೇಡು ಮಾಡಲು ವೈರಿಗೆ ನೀನು ಅವಕಾಶ ಕೊಡದಿದ್ದರೆ, ನೀನು ನನ್ನನ್ನು ಸ್ವೀಕರಿಸಿಕೊಂಡಿರುವೆ ಎಂದು ತಿಳಿದುಕೊಳ್ಳುವೆನು.

12 ನಿರಪರಾಧಿಯಾದ ನನಗೆ ಸಹಾಯಮಾಡು. ನಿನ್ನ ಸನ್ನಿಧಿಯಲ್ಲಿ ಯಾವಾಗಲೂ ನಿನ್ನ ಸೇವೆಮಾಡಲು ನನಗೆ ಅವಕಾಶ ಮಾಡಿಕೊಡು.

13 ಇಸ್ರೇಲರ ದೇವರಾದ ಯೆಹೋವನನ್ನು ಕೊಂಡಾಡಿರಿ! ಆತನು ಯಾವಾಗಲೂ ಇದ್ದವನು; ಯಾವಾಗಲೂ ಇರುವವನು. ಆಮೆನ್, ಆಮೆನ್!

# ಎರಡನೆ ಭಾಗ

## ಕೀರ್ತನೆ 42

*ರಚನೆಗಾರರು: ಕೋರಹೀಯರು*

1 ದೇವರೇ, ಬಾಯಾರಿದ ಜಿಂಕೆಯು ನೀರಿನ ತೊರೆಗಳನ್ನು ಬಯಸುವಂತೆಯೇ ನನ್ನ ಆತ್ಮವು ನಿನ್ನನ್ನು ಬಯಸುತ್ತದೆ.

2 ನನ್ನ ಆತ್ಮವು ಜೀವಸ್ವರೂಪನಾದ ದೇವರಿಗಾಗಿ ಬಾಯಾರಿದೆ. ನಾನು ಯಾವಾಗ ಆತನನ್ನು ಸಂಧಿಸುವೆನು?

3 ''ನಿನ್ನ ದೇವರು ಎಲ್ಲಿ?'' ಎಂದು ನನ್ನ ವೈರಿಗಳು ಯಾವಾಗಲೂ ಗೇಲಿಮಾಡುವುದರಿಂದ ಹಗಲಿರುಳು ಕಣ್ಣೀರೇ ನನಗೆ ಆಹಾರವಾಯಿತು.

4 ಆಗ ನಾನು, ಹಬ್ಬದ ಉತ್ಸಾಹದಲ್ಲಿ ಜನಸಮೂಹದೊಡನೆ ಹರ್ಷಿಸುತ್ತಾ ಸ್ತುತಿಗೀತೆಗಳನ್ನು ಹಾಡುತ್ತಾ ಅವರನ್ನು ದೇವಾಲಯಕ್ಕೆ ಮುನ್ನಡೆಸುತ್ತಿದ್ದದ್ದನ್ನು ನೆನಪಿಗೆ ತಂದುಕೊಂಡು ಹೃದಯಲ್ಲಿ ಕೊರಗುವೆನು.

5 ನನ್ನಾತ್ಮವೇ, ನೀನೇಕೆ ವ್ಯಸನದಿಂದಿರಬೇಕು? ನೀನೇಕೆ ಅಷ್ಟು ಬೇಸರಗೊಂಡಿರಬೇಕು? ದೇವರನ್ನೇ ನಿರೀಕ್ಷಿಸಿಕೊಂಡಿರು. ಆತನು ನನ್ನನ್ನು ರಕ್ಷಿಸುವನು. ಆತನನ್ನು ಸ್ತುತಿಸುವ ಅವಕಾಶವು ನನಗೆ ದೊರೆಯುವುದು.

6 ನನ್ನ ದೇವರೇ, ನಾನು ಕುಗ್ಗಿಹೋಗಿದ್ದೇನೆ. ಆದ್ದರಿಂದ ಹೆರ್ಮೋನ್ ಪರ್ವತದಲ್ಲಿಯೂ ಜೋರ್ಡನ್ ನದಿಯ ಪ್ರದೇಶದಲ್ಲಿಯೂ ಮಿಸ್ಸಾರ್ ಬೆಟ್ಟದಲ್ಲಿಯೂ* ನಾನು ನಿನ್ನನ್ನು ಜ್ಞಾಪಿಸಿಕೊಳ್ಳುವೆನು.

7 ಜಲಪಾತದ ಘೋಷದಂತೆಯೂ ಪ್ರವಾಹದ ಘರ್ಜನೆಯಂತೆಯೂ ಇಕ್ಕಟ್ಟುಗಳು ನನಗೆ ಬಂದಿವೆ. ಸಮುದ್ರದ ಅಲೆಗಳಂತೆ ದುಃಖವು ನನ್ನನ್ನು ಆವರಿಸಿಕೊಂಡಿದೆ.

8 ಹಗಲಲ್ಲಿ ಯೆಹೋವನು ನನಗೆ ನಿಜಪ್ರೀತಿಯನ್ನು ತೋರುವುದರಿಂದ ಜೀವಸ್ವರೂಪನಾದ ಆತನಿಗೆ ಪ್ರತಿ ರಾತ್ರಿಯಲ್ಲಿಯೂ ನೂತನ ಕೀರ್ತನೆಯನ್ನು ಹಾಡುವೆ; ಆತನಲ್ಲಿ ಪ್ರಾರ್ಥಿಸುವೆ.

9 ನನ್ನ ಬಂಡೆಯಾದ ದೇವರಿಗೆ, ''ನೀನು ನನ್ನನ್ನು ಯಾಕೆ ಮರೆತುಬಿಟ್ಟೆ? ನನ್ನ ಶತ್ರುಗಳ ಕ್ರೂರತೆಯಿಂದ ನಾನೇಕೆ ಸಂಕಟಪಡಬೇಕು?'' ಎಂದು ಕೇಳುವೆ.

10 ನನ್ನ ವಿರೋಧಿಗಳು ಸತತವಾಗಿ, ''ನಿನ್ನ ದೇವರು ಎಲ್ಲಿ?'' ಎಂದು ಕೇಳುವುದರಿಂದ ನನ್ನ ಮೂಳೆಗಳು ಮುರಿದಂತಾಗಿವೆ.

11 ನನ್ನ ಆತ್ಮವೇ, ನೀನು ವ್ಯಸನದಿಂದಿರುವುದೇಕೆ? ಗಲಿಬಿಲಿಗೊಂಡಿರುವುದೇಕೆ? ದೇವರನ್ನು ನಿರೀಕ್ಷಿಸು; ನನ್ನ ರಕ್ಷಕನೂ ದೇವರೂ ಆಗಿರುವ ಆತನನ್ನು ಸ್ತುತಿಸುತ್ತಲೇ ಇರುವೆನು.

## ಕೀರ್ತನೆ 43

1 ದೇವರೇ, ನನ್ನನ್ನು ನಿರಪರಾಧಿಯೆಂದು ತೀರ್ಪು ನೀಡು. ವ್ಯಾಜ್ಯದಲ್ಲಿ ನನ್ನ ಪರವಾಗಿಯೂ ಅನ್ಯ

**ಮಿಸ್ಸಾರ್ ಬೆಟ್ಟ** ಅಥವಾ ಶಿಖರ.

ಜನಾಂಗಗಳಿಗೆ ವಿರೋಧವಾಗಿಯೂ ವಾದಿಸು. ಸುಳ್ಳುಗಾರರಿಂದಲೂ ಕೆಡುಕರಿಂದಲೂ ನನ್ನನ್ನು ರಕ್ಷಿಸು.

2 ದೇವರೇ, ನೀನೇ ನನಗೆ ಆಶ್ರಯಸ್ಥಾನವಾಗಿರುವೆ! ನೀನು ನನ್ನನ್ನು ಯಾಕೆ ಕೈಬಿಟ್ಟಿರುವೆ? ಶತ್ರುಬಾಧೆಯಿಂದ ನಾನೇಕೆ ದುಃಖಿಸುತ್ತಾ ಸಂಕಟಪಡಬೇಕು?

3 ನಿನ್ನ ಬೆಳಕೂ ಸತ್ಯವೂ ನನ್ನ ಮೇಲೆ ಪ್ರಕಾಶಿಸಲಿ. ನಿನ್ನ ಬೆಳಕೂ ಸತ್ಯವೂ ನನಗೆ ಮಾರ್ಗದರ್ಶನ ನೀಡಲಿ. ಅವು ನನ್ನನ್ನು ನಿನ್ನ ಪವಿತ್ರ ಪರ್ವತಕ್ಕೂ ನಿನ್ನ ನಿವಾಸಕ್ಕೂ ನಡೆಸುತ್ತವೆ.

4 ನನ್ನ ದೇವರೇ, ನಿನ್ನ ಯಜ್ಞವೇದಿಕೆಯ ಬಳಿಗೆ ಬರುವೆನು. ನನ್ನ ಸಂತೋಷಕ್ಕೆ ನೀನೇ ಆಧಾರನಾಗಿರುವೆ. ದೇವರೇ, ನನ್ನ ದೇವರೇ, ಹಾರ್ಪ್‌ವಾದ್ಯವನ್ನು ಬಾರಿಸುತ್ತಾ ನಿನ್ನನ್ನು ಕೊಂಡಾಡುವೆನು.

5 ನಾನು ಬಹು ವ್ಯಸನದಿಂದಿರುವುದೇಕೆ? ನಾನು ಬಹು ಗಲಿಬಿಲಿಗೊಂಡಿರುವುದೇಕೆ? ನಾನು ದೇವರನ್ನೇ ನಿರೀಕ್ಷಿಸುವೆನು. ಆತನೇ ನನಗೆ ರಕ್ಷಕನೂ ದೇವರೂ ಆಗಿರುವುದರಿಂದ ಆತನನ್ನು ಸ್ತುತಿಸುತ್ತಲೇ ಇರುವೆನು.

## ಕೀರ್ತನೆ 44

*ರಚನೆಗಾರರು : ಕೋರಹೀಯರು*

1 ದೇವರೇ, ಪೂರ್ವಕಾಲದಲ್ಲಿ ನೀನು ಮಾಡಿದ ಮಹತ್ಕಾರ್ಯಗಳ ಕುರಿತು ಕೇಳಿದ್ದೇವೆ. ಅವುಗಳ ಕುರಿತು ನಮ್ಮ ಪೂರ್ವಿಕರೇ ನಮಗೆ ತಿಳಿಸಿದರು.

2 ದೇವರೇ, ನಿನ್ನ ಮಹಾಶಕ್ತಿಯಿಂದ ನೀನು ಈ ದೇಶವನ್ನು ಅನ್ಯಜನಾಂಗಗಳಿಂದ ನಮಗೆ ಕೊಟ್ಟಿರುವೆ. ಆ ವಿದೇಶಿಯರನ್ನು ನೀನು ಜಜ್ಜಿಹಾಕಿದೆ. ಈ ದೇಶದಿಂದ ನೀನು ಅವರನ್ನು ಹೊರಡಿಸಿಬಿಟ್ಟೆ.

3 ಈ ದೇಶವು ನಮಗೆ ದೊರೆತದ್ದು ನಮ್ಮ ಪೂರ್ವಿಕರ ಖಡ್ಗಗಳಿಂದಲ್ಲ. ಅವರನ್ನು ಜಯಶಾಲಿಗಳನ್ನಾಗಿ ಮಾಡಿದ್ದು ಅವರ ಭುಜಬಲವಲ್ಲ. ನಮ್ಮ ಪೂರ್ವಿಕರೊಂದಿಗೆ ನೀನಿದ್ದುದರಿಂದ ಅವರಿಗೆ ಜಯವು ದೊರೆಯಿತು. ದೇವರೇ, ನಿನ್ನ ಮಹಾಶಕ್ತಿಯು ಅವರನ್ನು ರಕ್ಷಿಸಿತು. ಅವರ ಮೇಲೆ ನಿನಗಿದ್ದ ಪ್ರೀತಿಯನ್ನು ಅದು ತೋರಿಸಿತು.

4 ನನ್ನ ದೇವರೇ, ನೀನೇ ನನ್ನ ರಾಜನು. ಆಜ್ಞಾಪಿಸಿ ಯಾಕೋಬನಿಗೆ ಜಯವನ್ನು ದಯಪಾಲಿಸು.

5 ನಿನ್ನ ಸಹಾಯದಿಂದಲೇ ನಮ್ಮ ಶತ್ರುಗಳನ್ನು ಹಿಂದಟ್ಟುವೆವು. ನಿನ್ನ ಹೆಸರಿನಿಂದ, ನಮ್ಮ ಶತ್ರುಗಳ ಮೇಲೆ ನಡೆದಾಡುವೆವು.

6 ನನ್ನ ಬಿಲ್ಲುಬಾಣಗಳಲ್ಲಿ ನಾನು ಭರವಸವಿಡುವುದಿಲ್ಲ. ನನ್ನ ಖಡ್ಗವು ನನ್ನನ್ನು ರಕ್ಷಿಸಲಾರದು.

7 ನೀನು ನಮ್ಮನ್ನು ಈಜಿಪ್ಟಿನಿಂದ ಬಿಡುಗಡೆ ಮಾಡಿದೆ. ನಮ್ಮ ಶತ್ರುಗಳನ್ನು ನಾಚಿಕೆಗೆ ಗುರಿಮಾಡಿದೆ.

8 ದಿನವೆಲ್ಲಾ ದೇವರನ್ನು ಕೊಂಡಾಡಿದೆವು. ನಿನ್ನ ಹೆಸರನ್ನು ಸದಾಕಾಲ ಸ್ತುತಿಸುವೆವು.

9 ಆದರೆ, ದೇವರೇ ಈಗ ನೀನು ನಮ್ಮನ್ನು ಕೈಬಿಟ್ಟಿರುವೆ. ನಮ್ಮನ್ನು ಅವಮಾನಕ್ಕೆ ಗುರಿಮಾಡಿರುವೆ. ನೀನು ನಮ್ಮೊಂದಿಗೆ ಯುದ್ಧಕ್ಕೆ ಬರಲಿಲ್ಲ.

10 ನಮ್ಮ ವೈರಿಗಳು ನಮ್ಮನ್ನು ಹಿಂದಟ್ಟುವಂತೆ ಮಾಡಿದೆ. ನಮ್ಮ ವೈರಿಗಳು ನಮ್ಮ ಐಶ್ವರ್ಯವನ್ನು ತೆಗೆದುಕೊಂಡರು.

11 ಕೊಯ್ಯಲ್ಪಡುವ ಕುರಿಗಳೊ ಎಂಬಂತೆ ನೀನು ನಮ್ಮನ್ನು ಅವರಿಗೆ ಒಪ್ಪಿಸಿಕೊಟ್ಟಿರುವೆ; ಅನ್ಯಜನಾಂಗಗಳ ಮಧ್ಯದಲ್ಲಿ ಚದರಿಸಿ ಬಿಟ್ಟಿರುವೆ.

12 ನಿನ್ನ ಜನರನ್ನು ಅತ್ಯಲ್ಪ ಬೆಲೆಗೆ ಮಾರಿಬಿಟ್ಟೆ. ಬೆಲೆಯ ಬಗ್ಗೆ ವಾದವನ್ನೂ ನೀನು ಮಾಡಲಿಲ್ಲ.

13 ನೀನು ನಮ್ಮನ್ನು ನೆರೆಹೊರೆಯವರಿಗೆ ತಮಾಷೆಯನ್ನಾಗಿ ಮಾಡಿರುವೆ. ನಮ್ಮ ನೆರೆಹೊರೆಯವರು ನಮ್ಮನ್ನು ಕಂಡು ನಗುತ್ತಾರೆ; ನಮ್ಮನ್ನು ಗೇಲಿ ಮಾಡುತ್ತಾರೆ.

14 ನಾವು ಜನರಿಗೆ ಗಾದೆಯ ಮಾತಾಗಿದ್ದೇವೆ. ಸ್ವದೇಶವನ್ನು ಹೊಂದಿಲ್ಲದವರು ಸಹ ನಮ್ಮನ್ನು ಕಂಡು ತಲೆಯಾಡಿಸುತ್ತಾ ನಗುತ್ತಾರೆ.

15 ನಾಚಿಕೆಯು ನನ್ನನ್ನು ಕವಿದುಕೊಂಡಿದೆ. ಅವಮಾನವು ದಿನವೆಲ್ಲಾ ನನ್ನೆದುರಿನಲ್ಲೇ ಇದೆ.

16 ನನ್ನ ವೈರಿಗಳ ಮತ್ತು ದೂಷಕರ ನಿಂದೆಯ ಮಾತುಗಳು ನನ್ನೆದುರಿನಲ್ಲಿ ಇವೆ.

17 ನಾವು ನಿನ್ನನ್ನು ಮರೆತಿಲ್ಲದಿದ್ದರೂ ನಾವು ನಿನ್ನೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನು ಉಲ್ಲಂಘಿಸಿಲ್ಲದಿದ್ದರೂ ಇವೆಲ್ಲಾ ನಮಗೆ ಬಂದಿವೆ.

18 ನಾವು ನಿನಗೆ ವಿಮುಖರಾಗದೆ ನಿನ್ನನ್ನೇ ಹಿಂಬಾಲಿಸಿದೆವು.

19 ಆದರೆ ನರಿಗಳು ವಾಸಿಸುವ ಈ ಸ್ಥಳದಲ್ಲಿ ನೀನು ನಮ್ಮನ್ನು ಜಜ್ಜಿಹಾಕಿರುವೆ. ಮರಣದಂತೆ ಕತ್ತಲಾಗಿರುವ ಈ ಸ್ಥಳದಲ್ಲಿ ನೀನು ನಮ್ಮನ್ನು ತೊರೆದುಬಿಟ್ಟಿರುವೆ.

20 ನಮ್ಮ ದೇವರ ಹೆಸರನ್ನು ನಾವು ಮರೆತುಬಿಟ್ಟೆವೋ? ಅನ್ಯ ದೇವರುಗಳಿಗೆ ನಾವು ಪ್ರಾರ್ಥಿಸಿದೆವೋ? ಇಲ್ಲ!

21 ದೇವರಿಗೆ ಇವು ಖಂಡಿತವಾಗಿ ತಿಳಿದಿವೆ. ನಮ್ಮ ಅಂತರಾಳದ ರಹಸ್ಯಗಳನ್ನು ಸಹ ಆತನು ಬಲ್ಲನು.

22 ದಿನವೆಲ್ಲಾ ನಾವು ಕೊಲೆಗೆ ಗುರಿಯಾಗಿದ್ದೇವೆ; ಕೊಯ್ಗುರಿಗಳಂತೆ ಪರಿಗಣಿಸಲ್ಪಟ್ಟಿದ್ದೇವೆ.

23 ನನ್ನ ಒಡೆಯನೇ ಎದ್ದೇಳು! ನೀನು ನಿದ್ರಿಸುತ್ತಿರುವುದೇಕೆ? ಎದ್ದೇಳು! ನಮ್ಮನ್ನು ಶಾಶ್ವತವಾಗಿ ಕೈಬಿಡಬೇಡ.

24 ನೀನು ನಮಗೆ ಮರೆಯಾಗಿರುವುದೇಕೆ? ನೀನು ನಮ್ಮ ನೋವುಗಳನ್ನೂ ತೊಂದರೆಗಳನ್ನೂ ಮರೆತು ಬಿಟ್ಟಿರುವೆಯಾ?
25 ನಾವು ಧೂಳಿಗೆ ತಳ್ಳಲ್ಪಟ್ಟವರಾಗಿದ್ದೇವೆ. ನಮ್ಮ ಹೊಟ್ಟೆಯು ನೆಲಕ್ಕೆ ಹತ್ತಿಕೊಂಡಿದೆ.
26 ಎದ್ದು ಸಹಾಯಮಾಡು! ನಿನ್ನ ಶಾಶ್ವತವಾದ ಪ್ರೀತಿಯ ನಿಮಿತ್ತ ನಮ್ಮನ್ನು ರಕ್ಷಿಸು.

## ಕೀರ್ತನೆ 45

*ರಚನೆಗಾರರು : ಕೋರಹೀಯರು*

1 ಒಂದು ದಿವ್ಯ ವಿಷಯವನ್ನು ಹೇಳಲು ನನ್ನ ಹೃದಯವು ತವಕಪಡುತ್ತದೆ; ನನ್ನ ರಾಜನನ್ನು ಕುರಿತು ಸುಂದರ ವಾದ ಗೀತೆಯೊಂದನ್ನು ರಚಿಸುವೆ. ನನ್ನ ನಾಲಿಗೆಯು ಕವಿಯ ಲೇಖನಿಯಂತೆ ಸಿದ್ಧವಾಗಿವೆ.
2 ನೀನು ಎಲ್ಲರಿಗಿಂತಲೂ ಅತಿಸುಂದರನಾಗಿರುವೆ. ನಿನ್ನ ಮಾತುಗಳು ಮನೋಹರವಾಗಿವೆ. ದೇವರ ಆಶೀರ್ವಾದವು ನಿನ್ನ ಮೇಲೆ ಸದಾಕಾಲವಿರುವುದು.
3 ನಿನ್ನ ಖಡ್ಗವನ್ನು ಕಟ್ಟಿಕೋ. ನಿನ್ನ ಮಹಿಮಾವಸ್ತ್ರವನ್ನು ಧರಿಸಿಕೋ.
4 ನೀನು ವೈಭವಯುತವಾಗಿ ಕಾಣುತ್ತಿರುವೆ! ಒಳ್ಳೆಯದಕ್ಕಾಗಿಯೂ ನ್ಯಾಯಕ್ಕಾಗಿಯೂ ಹೋರಾಡಿ ಗೆಲ್ಲು. ಶಕ್ತಿಯುತವಾದ ನಿನ್ನ ಬಲತೋಳಿನಿಂದ ಮಹತ್ಕಾರ್ಯಗಳನ್ನು ಮಾಡು.
5 ನಿನ್ನ ಬಾಣಗಳು ತೀಕ್ಷ್ಣವಾಗಿವೆ. ಅವು ನಿನ್ನ ಶತ್ರುಗಳ ಎದೆಗೆ ನಾಟಿಕೊಳ್ಳುತ್ತವೆ; ಶತ್ರುಗಳು ನಿನ್ನ ಕಣ್ಣೆದುರಿನಲ್ಲಿ ನೆಲಕ್ಕುರುಳುವರು.
6 ದೇವರೇ,* ನಿನ್ನ ಸಿಂಹಾಸನವು ಶಾಶ್ವತವಾದದ್ದು. ಒಳ್ಳೆಯತನವು ನಿನ್ನ ರಾಜದಂಡವಾಗಿದೆ.
7 ನೀನು ನೀತಿಯನ್ನು ಪ್ರೀತಿಸುವೆ; ದುಷ್ಟತನವನ್ನು ದ್ವೇಷಿಸುವೆ. ಆದ್ದರಿಂದ ನಿನ್ನ ದೇವರಾಗಿರುವಾತನು ನಿನ್ನನ್ನು ನಿನ್ನ ಸ್ನೇಹಿತರಿಗೆ ರಾಜನನ್ನಾಗಿ ಆರಿಸಿಕೊಂಡಿದ್ದಾನೆ.*
8 ನಿನ್ನ ಬಟ್ಟೆಗಳು ಪರಿಮಳ ದ್ರವ್ಯಗಳಾದ ಗೋಲರಸ, ಅಗರು ಮತ್ತು ಚಂದನಗಳಿಂದ ಕೂಡಿವೆ. ಗಜದಂತದಿಂದ ಶೃಂಗರಿಸಿರುವ ಅರಮನೆಗಳಲ್ಲಿ ನಿನ್ನನ್ನು ಸಂತೋಷ ಪಡಿಸಲು ವಾದ್ಯಗಳನ್ನು ನುಡಿಸುವರು.
9 ನಿನ್ನ ಸ್ತ್ರೀಪರಿವಾರದಲ್ಲಿರುವವರು ರಾಜಕುಮಾರಿಯರೇ. ನಿನ್ನ ಪಟ್ಟದರಾಣಿಯು ಓಫೀರ್ ದೇಶದ ಬಂಗಾರದಿಂದ ಮಾಡಿದ ಕಿರೀಟವನ್ನು ಧರಿಸಿಕೊಂಡು ನಿನ್ನ ಬಲಗಡೆಯಲ್ಲಿ ನಿಂತಿರುವಳು.
10-11 ರಾಣಿಯೇ, ನನಗೆ ಕಿವಿಗೊಡು. ಸೂಕ್ಷ್ಮವಾಗಿ ಗಮನಿಸಿ ಅರ್ಥಮಾಡಿಕೊ. ಸ್ವಜನರನ್ನೂ ತೌರುಮನೆಯನ್ನೂ ಮರೆತುಬಿಡು. ಆಗ ರಾಜನು ನಿನ್ನ ಸೌಂದರ್ಯವನ್ನು ಮೆಚ್ಚಿಕೊಳ್ಳುವನು. ಅವನು ನಿನಗೆ ಹೊಸ ಯಜಮಾನನಾಗಿರುವನು. ಆದ್ದರಿಂದ ನೀನು ಅವನನ್ನು ಗೌರವಿಸಬೇಕು.*
12 ತೂರ್ ಪಟ್ಟಣದ ಶ್ರೀಮಂತರು ನಿನ್ನನ್ನು ಸಂಧಿಸಲು ನಿನಗಾಗಿ ಉಡುಗೊರೆಗಳನ್ನು ತರುವರು.
13 ಅಂತಃಪುರದಲ್ಲಿ ರಾಜಕುಮಾರಿಯು ವೈಭವದಿಂದಿರುವಳು; ಆಕೆಯು ಜರತಾರಿಯ ವಸ್ತ್ರವನ್ನು ಧರಿಸಿಕೊಂಡಿದ್ದಾಳೆ.
14 ಆಕೆಯು ಕಸೂತಿರಚಿತವಾದ ವಸ್ತ್ರಗಳನ್ನು ಧರಿಸಿಕೊಂಡು ತನ್ನ ಸಖಿಯರಾದ ಕನ್ಯಾ ಪರಿವಾರದೊಡನೆ ರಾಜನ ಬಳಿಗೆ ಬರುವಳು.
15 ಅವರು ಸಂತೋಷದಿಂದಲೂ ಉಲ್ಲಾಸದಿಂದಲೂ ರಾಜನ ಅರಮನೆಯೊಳಕ್ಕೆ ಪ್ರವೇಶಿಸುವರು.
16 ರಾಜನೇ, ನಿನ್ನ ಗಂಡುಮಕ್ಕಳು ನಿನ್ನ ತರುವಾಯ ಆಡಳಿತಮಾಡುವರು; ನೀನು ಅವರನ್ನು ನಿನ್ನ ದೇಶದಲ್ಲೆಲ್ಲಾ ಅಧಿಪತಿಗಳನ್ನಾಗಿ ನೇಮಿಸುವೆ.
17 ನಾನು ನಿನ್ನ ಹೆಸರನ್ನು ಯಾವಾಗಲೂ ಪ್ರಖ್ಯಾತಿ ಪಡಿಸುವೆನು; ಜನಾಂಗಗಳು ನಿನ್ನನ್ನು ಸದಾಕಾಲ ಕೊಂಡಾಡುವರು.

## ಕೀರ್ತನೆ 46

*ರಚನೆಗಾರ; ಕೋರಹೀಯರು.*

1 ದೇವರು ನಮಗೆ ಆಶ್ರಯವೂ ಬಲವೂ ಆಗಿದ್ದಾನೆ. ಆತನು ಆಪತ್ತಿನಲ್ಲಿ ನಮಗೆ ಸಹಾಯಮಾಡಲು ಸದಾ ಸಿದ್ಧನಾಗಿರುವನು.
2 ಆದ್ದರಿಂದ ಭೂಮಿಯು ನಡುಗಿದರೂ ಬೆಟ್ಟಗಳು ಸಮುದ್ರದೊಳಗೆ ಮುಳುಗಿಹೋದರೂ ನಮಗೇನೂ ಭಯವಿಲ್ಲ.
3 ಸಮುದ್ರಗಳು ಭೋರ್ಗರೆಯುತ್ತಾ ನೊರೆಕಾರಿದರೂ ಅವುಗಳ ಅಲ್ಲೋಲಕಲ್ಲೋಲಗಳಿಂದ ಬೆಟ್ಟಗಳು ನಡುಗಿದರೂ ನಮಗೇನೂ ಭಯವಿಲ್ಲ.
4 ಒಂದು ನದಿ ಅದೆ; ಅದರ ಕಾಲುವೆಗಳು ಮಹೋನ್ನತನಾದ ದೇವರ ಪವಿತ್ರ ಪಟ್ಟಣವಾಗಿರುವ ದೇವನಗರವನ್ನು ಸಂತೋಷಪಡಿಸುತ್ತದೆ.

---

**ದೇವರೇ** ದೇವರನ್ನು ರಾಜನಂತೆ ವರ್ಣಿಸಿರುವ ಹಾಡು ಎಂಬ ಅರ್ಥವನ್ನು ಇದು ಕೊಡಬಹುದು ಅಥವಾ ಇಲ್ಲಿ ಲೇಖಕನು ‘‘ದೇವರು’’ ಎಂಬ ಪದವನ್ನು ರಾಜನಿಗೆ ಶಿರೋನಾಮೆಯಾಗಿ ಉಪಯೋಗಿಸಿರಬಹುದು.

**ನಿನ್ನ ಸ್ನೇಹಿತರಿಗೆ … ಆರಿಸಿಕೊಂಡಿದ್ದಾನೆ** ಅಕ್ಷರಶಃ, ನಿನ್ನ ಮೇಲೆ ಮತ್ತು ನಿನ್ನ ಸ್ನೇಹಿತರ ಮೇಲೆ ಆನಂದ ತೈಲವನ್ನು ಸುರಿದಿದ್ದಾನೆ. ರಾಜರನ್ನು, ಯಾಜಕರನ್ನು, ಮತ್ತು ಪ್ರವಾದಿಗಳನ್ನು ಅಭಿಷೇಕಿಸುವದಕ್ಕಾಗಿ ವಿಶೇಷವಾದ ಈ ತೈಲವನ್ನು ದೇವಾಲಯದಲ್ಲಿ ಇಟ್ಟಿರುತ್ತಿದ್ದರು.

**ಗೌರವಿಸಬೇಕು** ಅಕ್ಷರಶಃ ‘ಅವನಿಗೆ ತಲೆಬಾಗಬೇಕು.’

5 ದೇವರು ಆ ಪಟ್ಟಣದಲ್ಲಿದ್ದಾನೆ, ಆದ್ದರಿಂದ ಅದೆಂದಿಗೂ ನಾಶವಾಗುವುದಿಲ್ಲ. ಸೂರ್ಯೋದಯಕ್ಕಿಂತ ಮೊದಲೇ ದೇವರು ಅದರ ಸಹಾಯಕ್ಕಾಗಿ ಬರುವನು.

6 ಆತನು ಗರ್ಜಿಸಲು, ಜನಾಂಗಗಳು ಭಯದಿಂದ ನಡುಗುತ್ತವೆ, ರಾಷ್ಟ್ರಗಳು ಬಿದ್ದುಹೋಗುತ್ತವೆ; ಭೂಮಿಯು ಕರಗಿ ಹೋಗುವುದು.

7 ಸರ್ವಶಕ್ತನಾದ ಯೆಹೋವನು ನಮ್ಮೊಂದಿಗಿದ್ದಾನೆ. ಯಾಕೋಬನ ದೇವರು ನಮ್ಮ ಆಶ್ರಯದುರ್ಗವಾಗಿದ್ದಾನೆ.

8 ಬನ್ನಿರಿ, ಯೆಹೋವನ ಕಾರ್ಯಗಳನ್ನು ನೋಡಿರಿ; ಭೂಮಿಯ ಮೇಲೆ ಆತನು ಮಾಡುತ್ತಿರುವ ಭಯಂಕರವಾದ ಕಾರ್ಯಗಳನ್ನು ನೋಡಿರಿ.

9 ಇಡೀ ಪ್ರಪಂಚದಲ್ಲಿ ಆತನು ಯುದ್ಧವನ್ನು ನಿಲ್ಲಿಸುವನು; ಬಿಲ್ಲುಗಳನ್ನೂ ಗುರಾಣಿಗಳನ್ನೂ* ಮುರಿದು ಹಾಕುವನು; ಗುರಾಣಿಗಳನ್ನು ಬೆಂಕಿಯಿಂದ ಸುಟ್ಟು ಹಾಕುವನು.

10 ದೇವರು ಇಂತೆನ್ನುವನು: ‘‘ಹೋರಾಡುವುದನ್ನು ನಿಲ್ಲಿಸಿ, ನಾನೇ ದೇವರೆಂಬುದನ್ನು ಕಲಿತುಕೊಳ್ಳಿ! ನಾನು ಜನಾಂಗಗಳನ್ನು ಸೋಲಿಸುವೆನು! ಇಡೀ ಲೋಕವನ್ನು ಹತೋಟಿಗೆ ತೆಗೆದುಕೊಳ್ಳುವೆನು!’’

11 ಸರ್ವಶಕ್ತನಾದ ಯೆಹೋವನು ನಮ್ಮೊಂದಿಗಿದ್ದಾನೆ. ಯಾಕೋಬನ ದೇವರು ನಮಗೆ ಆಶ್ರಯದುರ್ಗವಾಗಿದ್ದಾನೆ.

## ಕೀರ್ತನೆ 47

*ರಚನೆಗಾರರು : ಕೋರಹೀಯರು*

1 ಸರ್ವಜನಾಂಗಗಳೇ, ಚಪ್ಪಾಳೆ ತಟ್ಟಿರಿ; ದೇವರಿಗೆ ಆನಂದ ಘೋಷಮಾಡಿರಿ!

2 ಮಹೋನ್ನತನಾದ ಯೆಹೋವನು ಭಯಂಕರನಾಗಿದ್ದಾನೆ. ಆತನು ಭೂಲೋಕಕ್ಕೆಲ್ಲಾ ಮಹಾರಾಜನಾಗಿದ್ದಾನೆ.

3 ಆತನು ಜನಾಂಗಗಳನ್ನು ಸೋಲಿಸಲು ನಮಗೆ ಸಹಾಯ ಮಾಡಿ ಅವುಗಳನ್ನು ನಮಗೆ ಅಧೀನಪಡಿಸಿದ್ದಾನೆ.

4 ದೇವರು ಈ ದೇಶವನ್ನು ನಮಗೋಸ್ಕರವಾಗಿ ಆರಿಸಿಕೊಂಡನು; ತನಗೆ ಪ್ರಿಯರಾದ ಯಾಕೋಬನ ವಂಶಸ್ಥರಿಗಾಗಿ ಆತನು ಮನೋಹರವಾದ ಈ ದೇಶವನ್ನು ಆರಿಸಿ ಕೊಂಡನು.

5 ಆನಂದಘೋಷದೊಡನೆಯೂ ತುತ್ತೂರಿಗಳ ಧ್ವನಿಯೊಡನೆಯೂ ಸಿಂಹಾಸನಾರೂಢನಾಗುವನು.

6 ದೇವರನ್ನು ಸಂಕೀರ್ತಿಸಿರಿ, ಸಂಕೀರ್ತಿಸಿರಿ. ನಮ್ಮ ರಾಜನನ್ನು ಸಂಕೀರ್ತಿಸಿರಿ, ಸಂಕೀರ್ತಿಸಿರಿ.

7 ದೇವರು ಇಡೀಲೋಕಕ್ಕೆ ರಾಜನಾಗಿದ್ದಾನೆ; ಆತನಿಗೆ ಸ್ತುತಿಗೀತೆಗಳನ್ನು ಹಾಡಿರಿ.

8 ದೇವರು ತನ್ನ ಪರಿಶುದ್ಧ ಸಿಂಹಾಸನದ ಮೇಲೆ ಕುಳಿತುಕೊಂಡಿದ್ದಾನೆ; ದೇವರು ಎಲ್ಲಾ ಜನಾಂಗಗಳನ್ನು ಆಳುವನು.

9 ಜನಾಂಗಗಳ ನಾಯಕರು ಅಬ್ರಹಾಮನ ದೇವಜನರೊಡನೆ ಕೂಡಿಬರುವರು. ಎಲ್ಲಾ ಜನಾಂಗಗಳ ಎಲ್ಲಾ ನಾಯಕರುಗಳು ದೇವರಿಗೆ ಅಧೀನರಾಗಿದ್ದಾರೆ. ದೇವರು ಅವರಿಗೆ ಸರ್ವಾಧಿಕಾರಿ!

## ಕೀರ್ತನೆ 48

*ರಚನೆಗಾರರು : ಕೋರಹೀಯರು*

1 ಯೆಹೋವನೇ ಮಹೋನ್ನತನು. ನಮ್ಮ ದೇವರನ್ನು ಆತನ ಪವಿತ್ರ ಪರ್ವತ ಪಟ್ಟಣದಲ್ಲಿ ಜನರು ಬಹಳವಾಗಿ ಕೊಂಡಾಡುವರು.

2 ದೇವರ ಪವಿತ್ರ ಪಟ್ಟಣವು ರಮ್ಯವಾಗಿದೆ. ಭೂಲೋಕದಲ್ಲೆಲ್ಲಾ ಇರುವ ಜನರನ್ನು ಅದು ಸಂತೋಷಗೊಳಿಸುವುದು. ಸಿಯೋನ್ ಪರ್ವತವೇ ದೇವರ ನಿಜವಾದ ಪರ್ವತ.* ಅದೇ ಆ ಮಹಾರಾಜನ ಪರ್ವತ.

3 ದೇವರು ಆ ಪಟ್ಟಣಗಳ ಅರಮನೆಗಳಲ್ಲಿ, ತಾನೇ ಆಶ್ರಯದುರ್ಗವೆಂದು ಹೆಸರುವಾಸಿಯಾಗಿದ್ದಾನೆ.

4 ಒಮ್ಮೆ ಕೆಲವು ರಾಜರು ಒಟ್ಟಾಗಿ ಸೇರಿಬಂದರು. ಆ ಪಟ್ಟಣದ ಮೇಲೆ ಧಾಳಿ ಮಾಡಲೆಂದು ಅವರೆಲ್ಲ ಅದರತ್ತ ನಡೆದರು.

5 ಆದರೆ ಅವರು ಅದನ್ನು ಕಂಡಾಗ ದಿಗ್ಭ್ರಮೆಗೊಂಡರು; ಭಯದಿಂದ ಓಡಿಹೋದರು.

6 ಭಯವು ಅವರನ್ನು ಪ್ರಸವ ವೇದನೆಯಂತೆ ಆವರಿಸಿಕೊಂಡಿತು.

7 ಪೂರ್ವದ ಬಿರುಗಾಳಿಯಿಂದ ಒಡೆದುಹೋದ ಹಡಗುಗಳಂತೆ ನೀನು ಅವರನ್ನು ನಾಶಮಾಡಿದೆ.

8 ಹೌದು, ಆ ರಾಜರುಗಳಿಗೆ ಸಂಭವಿಸಿದ್ದನ್ನು ನಾವು ಕಿವಿಯಾರೆ ಕೇಳಿದಂತೆಯೇ ಕಣ್ಣಾರೆಯೂ ಕಂಡೆವು. ನಮ್ಮ ದೇವರೂ ಸರ್ವಶಕ್ತನೂ ಆಗಿರುವ ಯೆಹೋವನ ಪಟ್ಟಣದಲ್ಲಿ ನಾವು ಅದನ್ನು ನೋಡಿದ್ದೇವೆ. ದೇವರು ಆ ಪಟ್ಟಣವನ್ನು ಶಾಶ್ವತವಾಗಿ ಭದ್ರಗೊಳಿಸುವನು.

9 ದೇವರೇ, ನಿನ್ನ ಆಲಯದಲ್ಲಿ ನಿನ್ನ ಶಾಶ್ವತ ಪ್ರೀತಿಯ ಕುರಿತು ಧ್ಯಾನಿಸುವೆವು.

---

**ಗುರಾಣಿಗಳನ್ನು** ಅಥವಾ ರಥಗಳನ್ನು

**ದೇವರ ನಿಜವಾದ ಪರ್ವತ** ಅಕ್ಷರಶಃ ‘‘ಅತ್ಯಂತ ಎತ್ತರವಾದ ಜಾಫೋನ್.’’ ಕಾನಾನ್ಯರ ಪುರಾಣದ ಪ್ರಕಾರ ಜಾಫೋನ್ ಎತ್ತರವಾದ ಪರ್ವತವಾಗಿತ್ತು ಮತ್ತು ಒಲಂಪಸ್ ಬೆಟ್ಟದಂತೆ ದೇವರುಗಳ ಪವಿತ್ರ ಬೆಟ್ಟವಾಗಿತ್ತು.

10 ದೇವರೇ, ನೀನು ಪ್ರಖ್ಯಾತನಾಗಿರುವೆ. ಭೂಮಿಯ
ಮೇಲೆಲ್ಲಾ ಜನರು ನಿನ್ನನ್ನು ಕೊಂಡಾಡುವರು. ನೀನು
ಎಷ್ಟು ಒಳ್ಳೆಯವನೆಂಬುದು ಪ್ರತಿಯೊಬ್ಬರಿಗೂ
ತಿಳಿದಿದೆ.
11 ನಿನ್ನ ನ್ಯಾಯ ನಿರ್ಣಯಗಳಿಂದ ಸಿಯೋನ್
ಪರ್ವತವು ಹರ್ಷಿಸಲಿ; ಯೆಹೂದರ ಊರುಗಳು
ಉಲ್ಲಾಸಿಸಲಿ.
12 ಚೀಯೋನಿನ ಸುತ್ತಲೂ ಸಂಚರಿಸಿ, ಆ ಪಟ್ಟಣವನ್ನು
ನೋಡಿರಿ. ಅದರ ಬುರುಜುಗಳನ್ನು ಎಣಿಸಿರಿ.
13 ಅದರ ಕೋಟೆಗಳನ್ನು ನೋಡಿರಿ. ಚೀಯೋನಿನ ಅರ
ಮನೆಗಳನ್ನು ಹೊಗಳಿರಿ. ಆಗ ನೀವು ನಿಮ್ಮ ಮುಂದಿನ
ಸಂತತಿಯವರಿಗೆ ಅದರ ಬಗ್ಗೆ ಹೇಳಬಲ್ಲಿರಿ.
14 ಈ ದೇವರೇ ಎಂದೆಂದಿಗೂ ನಮ್ಮ ದೇವರು! ನಮ್ಮನ್ನು
ಶಾಶ್ವತವಾಗಿ ನಡೆಸುವಾತನು ಆತನೇ!

## ಕೀರ್ತನೆ 49

*ರಚನೆಗಾರರು : ಕೋರಹೀಯರು*

1 ಸರ್ವಜನಾಂಗಗಳೇ, ಕೇಳಿರಿ. ಭೂನಿವಾಸಿಗಳೆಲ್ಲರೇ,
ಆಲಿಸಿರಿ.
2 ಸಾಮಾನ್ಯರೇ, ಅಧಿಪತಿಗಳೇ, ಬಡವರೇ,
ಶ್ರೀಮಂತರೇ, ಕೇಳಿರಿ.
3 ನಾನು ನಿಮಗೆ ಸುಜ್ಞಾನವನ್ನೂ ವಿವೇಕವನ್ನೂ
ಬೋಧಿಸುವೆನು.
4 ನಾನು ಅವುಗಳನ್ನು ಕಿವಿಗೊಟ್ಟು ಕೇಳಿದ್ದೇನೆ. ನಾನು
ಹಾರ್ಪ್‌ವಾದ್ಯವನ್ನು ನುಡಿಸುತ್ತಾ ಅವುಗಳನ್ನು
ನಿಮಗಾಗಿ ಹಾಡುವೆನು.
5 ಆಪತ್ತು ಬಂದಾಗ ನಾನೇಕೆ ಭಯಪಡಬೇಕು?
ದುಷ್ಟರು ನನ್ನನ್ನು ಆವರಿಸಿ ಮೋಸದಿಂದ ಹಿಡಿಯಲು
ಪ್ರಯತ್ನಿಸುವಾಗ ನಾನೇಕೆ ಭಯಪಡಬೇಕು?
6 ತಮ್ಮ ಸ್ವಂತ ಬಲದಲ್ಲಿಯೂ ಐಶ್ವರ್ಯದಲ್ಲಿಯೂ
ಭರವಸೆ ಇಟ್ಟಿದ್ದಾರೆ; ಅವರು ಬುದ್ಧಿಹೀನರಾಗಿದ್ದಾರೆ.
7 ಯಾವ ಮಾನವ ಸ್ನೇಹಿತನೂ ನಿನ್ನನ್ನು ರಕ್ಷಿಸಲಾರನು.
ಅಲ್ಲದೆ ದೇವರಿಗೆ ಈಡನ್ನು ಕೊಟ್ಟು ನಿನ್ನನ್ನು ಬಿಡಿಸಿ
ಕೊಳ್ಳಲಾರನು.
8 ಸ್ವಂತ ಪ್ರಾಣವನ್ನು ಖರೀದಿಸಲು ಬೇಕಾಗುವಷ್ಟು ಹಣ
ಯಾವನಿಗೂ ದೊರೆಯವುದಿಲ್ಲ.
9 ಸದಾಕಾಲ ಬದುಕುವ ಹಕ್ಕನ್ನು ಖರೀದಿಸಲು ಮತ್ತು
ತನ್ನ ಸಮಾಧಿಯಲ್ಲಿ ತನ್ನ ಸ್ವಂತ ದೇಹ ಕೊಳೆಯದಂತೆ
ಮಾಡಲು ಬೇಕಾಗುವಷ್ಟು ಹಣವನ್ನು ಯಾವನೂ
ಪಡೆದುಕೊಳ್ಳಲಾರನು.
10 ಬುದ್ಧಿಹೀನರೂ ಮೂಢರೂ ಸಾಯುವಂತೆ ಜ್ಞಾನಿ
ಗಳೂ ಸಾಯುವರು. ಅವರು ಸತ್ತಾಗ ಅವರ ಆಸ್ತಿಯು
ಬೇರೆಯವರ ಪಾಲಾಗುವುದು.
11 ಸಮಾಧಿಯೇ ಅವರ ಶಾಶ್ವತವಾದ ಹೊಸ ಮನೆ.
ಅವರೆಷ್ಟೇ ಭೂಆಸ್ತಿಯನ್ನು ಹೊಂದಿದ್ದರೂ ಅದ
ರಿಂದೇನೂ ಪ್ರಯೋಜನವಿಲ್ಲ.
12 ಜನರು ಐಶ್ವರ್ಯವಂತರಾಗಿದ್ದರೂ ಭೂಲೋಕ
ದಲ್ಲಿ ಶಾಶ್ವತವಾಗಿ ಇರಲಾಗದು. ಎಲ್ಲರೂ ಪ್ರಾಣಿ
ಗಳಂತೆಯೇ ಸಾಯುವರು.
13 ತಮ್ಮ ಐಶ್ವರ್ಯವನ್ನು ಮೆಚ್ಚಿಕೊಂಡಿರುವ ಬುದ್ಧಿ
ಹೀನರಿಗೆ ಇದೇ ಗತಿ.
14 ಅವರು ಕುರಿಗಳಂತಿದ್ದಾರೆ. ಸಮಾಧಿಯೇ ಅವರ
ಕೊಟ್ಟಿಗೆ. ಮರಣವೇ ಅವರ ಕುರುಬ. ಒಂದು
ಮುಂಜಾನೆ, ಅವರ ದೇಹಗಳು ಅವರ ಮನೆಗಳಿಂದ
ದೂರವಾಗಿ ಸಮಾಧಿಯಲ್ಲಿ ಕೊಳೆಯುತ್ತಿರಲು, ನೀತಿ
ವಂತರು ಜಯಶಾಲಿಗಳಾಗಿರುವರು.
15 ಆದರೆ ದೇವರು ಈಡುಕೊಟ್ಟು ನನ್ನ ಪ್ರಾಣವನ್ನು
ರಕ್ಷಿಸುವನು. ಆತನು ನನ್ನನ್ನು ತನ್ನೊಂದಿಗಿರಲು
ಕೊಂಡೊಯ್ಯುವಾಗ ನನ್ನನ್ನು ಸಮಾಧಿಯ ಬಲ
ದಿಂದ ರಕ್ಷಿಸುವನು.
16 ಜನರು ಐಶ್ವರ್ಯವಂತರಾಗಿದ್ದ ಮಾತ್ರಕ್ಕೆ ನೀವು
ಅವರಿಗೆ ಭಯಪಡಬೇಕಿಲ್ಲ. ಜನರು ಭವ್ಯವಾದ ಮನೆ
ಗಳಲ್ಲಿದ್ದ ಮಾತ್ರಕ್ಕೆ ನೀವು ಅವರಿಗೆ ಭಯಪಡಬೇಕಿಲ್ಲ
17 ಅವರು ಸಾಯುವಾಗ ತಮ್ಮೊಂದಿಗೆ ಏನನ್ನೂ ತೆಗೆದು
ಕೊಂಡು ಹೋಗಲಾರರು. ಅವರ ವೈಭವವು ಅವ
ರೊಂದಿಗೆ ಹೋಗಲಾರದು.
18 ಐಶ್ವರ್ಯವಂತನು ತನ್ನ ವಿಷಯದಲ್ಲಿ ಉಬ್ಬಿ
ಕೊಂಡಿದ್ದರೂ ಜನರು ಅವನನ್ನು ಹೊಗಳುತ್ತಿದ್ದರೂ
19 ಸತ್ತು ತನ್ನ ಪೂರ್ವಿಕರ ಬಳಿ ಸೇರುವ ಕಾಲ ಅವನಿಗೆ
ಬಂದೇ ಬರುವುದು. ಅವನು ಹಗಲಿನ ಬೆಳಕನ್ನು
ಮತ್ತೆಂದಿಗೂ ನೋಡಲಾರ.
20 ಅರ್ಥಮಾಡಿಕೊಳ್ಳಲಾರದವನು ಎಷ್ಟೇ ಐಶ್ವರ್ಯ
ವಂತನಾಗಿದ್ದರೂ ಪ್ರಾಣಿಗಳಂತೆಯೇ ನಾಶ
ವಾಗುವನು.

## ಕೀರ್ತನೆ 50

*ರಚನೆಗಾರ: ಆಸಾಫ*

1 ದೇವಾಧಿದೇವನಾದ ಯೆಹೋವನು ಪೂರ್ವದಿಂದ
ಪಶ್ಚಿಮದವರೆಗೂ ಇರುವ ಭೂನಿವಾಸಿಗಳೆಲ್ಲರನ್ನು
ತನ್ನ ಸನ್ನಿಧಿಗೆ ಬರಲು ಆಜ್ಞಾಪಿಸುವನು.
2 ಸೌಂದರ್ಯದಿಂದ ಕಂಗೊಳಿಸುತ್ತಿರುವ ಚೀಯೋನಿ
ನಲ್ಲಿ ದೇವರು ಪ್ರಕಾಶಿಸುತ್ತಾನೆ.
3 ನಮ್ಮ ದೇವರು ಬರುತ್ತಿದ್ದಾನೆ; ಆತನು ಸುಮ್ಮನಿರುವು
ದಿಲ್ಲ. ಆತನ ಮುಂಭಾಗದಲ್ಲಿ ಬೆಂಕಿಯು ಪ್ರಜ್ವಲಿಸು
ವುದು. ಆತನ ಸುತ್ತಲೂ ಬಿರುಗಾಳಿ ಬೀಸುವುದು.

4 ಯೆಹೋವನು ತನ್ನ ಜನರಿಗೆ ನ್ಯಾಯವಿಚಾರಣೆಗಾಗಿ ಭೂಮ್ಯಾಕಾಶಗಳನ್ನು ಸಾಕ್ಷಿಗಳಾಗಿ ಕರೆಯುವನು.

5 ದೇವರು ಇಂತೆನ್ನುವನು: ‘‘ನನ್ನೊಡನೆ ಯಜ್ಞದ ಮೂಲಕ ಒಡಂಬಡಿಕೆ ಮಾಡಿಕೊಂಡ ನನ್ನ ಪವಿತ್ರ ಪ್ರಜೆಗಳೇ ನನ್ನ ಸುತ್ತಲೂ ಸೇರಿ ಬನ್ನಿರಿ’’ ಎಂದು ಆಜ್ಞಾಪಿಸುವನು.

6 ದೇವರೊಬ್ಬನೇ, ನ್ಯಾಯಾಧಿಪತಿ; ಆತನು ನೀತಿಸ್ವರೂಪನೆಂದು ಆಕಾಶಮಂಡಲವು ಘೋಷಿಸುವುದು.

7 ದೇವರು ಇಂತೆನ್ನುತ್ತಾನೆ: ‘‘ನನ್ನ ಜನರೇ, ಇಸ್ರೇಲರೇ, ನನಗೆ ಕಿವಿಗೊಡಿರಿ! ನಾನು ನಿಮಗೆ ವಿರುದ್ಧವಾಗಿ ಸಾಕ್ಷಿ ಹೇಳುವೆನು. ದೇವರಾದ ನಾನೇ, ನಿಮ್ಮ ದೇವರು!

8 ನಿಮ್ಮ ಯಜ್ಞಗಳ ಬಗ್ಗೆ ನಾನು ದೂರು ಹೇಳುತ್ತಿಲ್ಲ. ಇಸ್ರೇಲರಾದ ನೀವು ನನಗೆ ಸರ್ವಾಂಗ ಹೋಮಗಳನ್ನು ನಿತ್ಯವೂ ಅರ್ಪಿಸುತ್ತಲೇ ಇದ್ದೀರಿ.

9 ನಿಮ್ಮ ಮನೆಗಳಿಂದ ನಾನು ಹೋರಿಗಳನ್ನು ತೆಗೆದುಕೊಳ್ಳುವುದಿಲ್ಲ; ನಿಮ್ಮ ದೊಡ್ಡಿಗಳಿಂದ ಆಡುಗಳನ್ನು ತೆಗೆದುಕೊಳ್ಳುವುದಿಲ್ಲ.

10 ನನಗೆ ಆ ಪಶುಗಳ ಅಗತ್ಯವಿಲ್ಲ. ಕಾಡಿನಲ್ಲಿರುವ ಸರ್ವಮೃಗಗಳೂ ಗುಡ್ಡಗಳ ಮೇಲಿರುವ ಸಾವಿರಾರು ಪಶುಗಳು ನನ್ನವೇ.

11 ಅತ್ಯಂತ ಉನ್ನತವಾದ ಬೆಟ್ಟಗಳ ಮೇಲಿರುವ ಪಕ್ಷಿಗಳೆಲ್ಲಾ ನನಗೆ ಗೊತ್ತುಂಟು. ಬೆಟ್ಟಗಳ ಮೇಲೆ ಚಲಿಸುವ ಜೀವ ಜಂತುಗಳೆಲ್ಲಾ ನನ್ನವೇ.

12 ನನಗೆ ಹಸಿವೆಯಾಗಿದ್ದರೆ, ಆಹಾರಕ್ಕಾಗಿ ನಿಮ್ಮನ್ನು ಕೇಳಬೇಕಿಲ್ಲ. ಲೋಕವೂ ಅದರಲ್ಲಿರುವ ಸಮಸ್ತವೂ ನನ್ನದೇ.

13 ನಾನು ಹೋರಿಗಳ ಮಾಂಸವನ್ನು ತಿನ್ನುವೆನೇ? ನಾನು ಆಡುಗಳ ರಕ್ತವನ್ನು ಕುಡಿಯುವೆನೇ?’’

ಕೃತಜ್ಞತಾಯಜ್ಞಗಳನ್ನು ದೇವರಿಗೆ ಅರ್ಪಿಸಿರಿ. ನೀವು ಮಾಡಿಕೊಂಡ ಹರಕೆಗಳನ್ನು ಮಹೋನ್ನತನಿಗೆ ಸಲ್ಲಿಸಿರಿ.

15 ದೇವರು ಇಂತೆನ್ನುತ್ತಾನೆ: ‘‘ಆಪತ್ಕಾಲಗಳಲ್ಲಿ ನನಗೆ ಮೊರೆಯಿಡಿರಿ! ನಾನು ನಿಮಗೆ ಸಹಾಯ ಮಾಡುವೆನು, ಆಗ ನೀವು ನನ್ನನ್ನು ಸನ್ಮಾನಿಸುವಿರಿ.’’

16 ದೇವರು ದುಷ್ಟರಿಗೆ ಇಂತೆನ್ನುವನು: ‘‘ನೀವು ನನ್ನ ಕಟ್ಟಳೆಗಳ ಕುರಿತು ಮಾತಾಡುವಿರಿ; ನನ್ನ ಒಡಂಬಡಿಕೆಯ ಕುರಿತು ಮಾತಾಡುವಿರಿ.

17 ಹೀಗಿರಲು ನೀವು ನನ್ನ ತಿದ್ದುಪಡಿಯನ್ನು ದ್ವೇಷಿಸುವುದೇಕೆ? ನಾನು ಹೇಳುವುದನ್ನು ನೀವು ತುಚ್ಛೀಕರಿಸುವುದೇಕೆ?

18 ನೀವು ಕಳ್ಳನನ್ನು ಕಂಡು ಅವನೊಂದಿಗೆ ಸೇರಿಕೊಳ್ಳಲು ಓಡಿಹೋಗುವಿರಿ; ವ್ಯಭಿಚಾರಿಗಳ ಒಡನಾಟ ಮಾಡುವಿರಿ.

19 ನಿಮ್ಮ ಬಾಯಿಂದ ಕೇಡನ್ನು ಕಲ್ಪಿಸುವಿರಿ. ನಿಮ್ಮ ನಾಲಿಗೆಯಿಂದ ಮೋಸವನ್ನು ನೇಯುವಿರಿ.

20 ಬೇರೆಯವರ ಮೇಲೆಯೂ ನಿಮ್ಮ ಸಹೋದರರ ಮೇಲೆಯೂ ಕೆಟ್ಟದ್ದನ್ನು ಹೇಳುತ್ತಲೇ ಇರುತ್ತೀರಿ.

21 ನೀವು ಹೀಗೆ ಮಾಡಿದರೂ ನಾನು ಮೌನವಾಗಿದ್ದೆನು. ಆದ್ದರಿಂದ ನಾನೂ ನಿಮ್ಮಂಥವನೆಂದು ನೀವು ಆಲೋಚಿಸಿಕೊಂಡಿರಿ. ಈಗಲಾದರೋ ನಾನು ಮೌನವಾಗಿರುವುದಿಲ್ಲ! ಎಲ್ಲವನ್ನು ನಿಮಗೆ ವಿವರಿಸಿ ನಿಮ್ಮ ಮುಂದೆಯೇ ನಿಮ್ಮನ್ನು ಟೀಕಿಸುವೆನು!

22 ದೇವರನ್ನು ಮರೆತುಬಿಟ್ಟವರೇ, ಇದನ್ನು ಗಮನಕ್ಕೆ ತಂದುಕೊಳ್ಳಿರಿ. ಇಲ್ಲವಾದರೆ ತುಂಡು ತುಂಡು ಮಾಡುವೆನು; ಯಾರೂ ನಿಮ್ಮನ್ನು ರಕ್ಷಿಸಲಾರರು!

23 ನನಗೆ ಕೃತಜ್ಞತಾಯಜ್ಞವನ್ನು ಅರ್ಪಿಸುವವನೇ ನನ್ನನ್ನು ಸನ್ಮಾನಿಸುವವನು. ಆದರೆ ನೀತಿವಂತನಾಗಿ ಜೀವಿಸುವವನಿಗೆ ನನ್ನ ರಕ್ಷಣಾಶಕ್ತಿಯನ್ನು ತೋರಿಸುವೆನು.’’

## ಕೀರ್ತನೆ 51

*ದಾವೀದನು ಬತ್ಷೆಬಳೊಂದಿಗೆ ವ್ಯಭಿಚಾರ ಮಾಡಿದಾಗ ಪ್ರವಾದಿಯಾದ ನಾತಾನನು ದಾವೀದನ ಬಳಿಗೆ ಹೋಗಿ ದೇವರ ನ್ಯಾಯತೀರ್ಪನ್ನು ಹೇಳುತ್ತಾನೆ. ಆಗ ಈ ಕೀರ್ತನೆ ರಚಿಸಲ್ಪಟ್ಟಿತು.*

*ರಚನೆಗಾರ: ದಾವೀದ*

1 ಪ್ರೀತಿಸ್ವರೂಪನಾದ ದೇವರೇ, ನನಗೆ ಕರುಣೆ ತೋರು; ಕರುಣಾನಿಧಿಯೇ, ನನ್ನ ಪಾಪಗಳನ್ನೆಲ್ಲಾ ಅಳಿಸಿಹಾಕು.

2 ನನ್ನ ದೋಷವನ್ನು ತೊಳೆದುಬಿಡು. ನನ್ನ ಪಾಪವನ್ನು ಪರಿಹರಿಸಿ ನನ್ನನ್ನು ಮತ್ತೆ ಶುದ್ಧೀಕರಿಸು!

3 ನಾನು ಪಾಪಮಾಡಿದ್ದೇನೆಂದು ನನಗೆ ಗೊತ್ತಿದೆ. ಆ ಪಾಪಗಳು ನನ್ನ ಮುಂದೆಯೇ ಇವೆ.

4 ನಿನ್ನ ದೃಷ್ಟಿಗೆ ಕೆಟ್ಟದ್ದಾಗಿದ್ದನ್ನೇ ಮಾಡಿದ್ದೇನೆ. ಹೌದು, ನಾನು ಪಾಪ ಮಾಡಿದ್ದು ನಿನಗೇ. ನಾನು ತಪ್ಪಿತಸ್ಥನೆಂತಲೂ ನೀನು ನೀತಿವಂತನೆಂತಲೂ ಜನರಿಗೆ ಗೊತ್ತಾಗಲೆಂದೇ ಇವುಗಳನ್ನು ಅರಿಕೆಮಾಡಿಕೊಳ್ಳುತ್ತಿದ್ದೇನೆ. ನಿನ್ನ ತೀರ್ಪುಗಳು ನ್ಯಾಯಬದ್ಧವಾಗಿವೆ.

5 ಹುಟ್ಟಿದಂದಿನಿಂದ ನಾನು ಪಾಪಿಯೇ. ಮಾತೃಗರ್ಭದಿಂದ ನಾನು ದ್ರೋಹಿಯೇ.

6 ದೇವರೇ, ನಾನು ನಿನಗೆ ನಂಬಿಗಸ್ತನಾಗಿರಬೇಕೆಂಬುದೇ ನಿನ್ನ ಅಪೇಕ್ಷೆ. ಆದ್ದರಿಂದ ಸುಜ್ಞಾನದ ರಹಸ್ಯಗಳನ್ನು ನನಗೆ ಉಪದೇಶಿಸು.

7 ಹಿಸ್ಸೋಪ್ ಗಿಡದ ಬರಲಿನಿಂದ ನನ್ನನ್ನು ತೊಳೆದು ಶುದ್ಧೀಕರಿಸು; ನಾನು ಹಿಮಕ್ಕಿಂತಲೂ ಬಿಳುಪಾಗುವ ತನಕ ನನ್ನನ್ನು ತೊಳೆ!

8 ನನ್ನಲ್ಲಿ ಆನಂದವನ್ನೂ ಉಲ್ಲಾಸವನ್ನೂ ಬರಮಾಡು. ನೀನು ಜಜ್ಜಿಹಾಕಿದ ಮೂಳೆಗಳು ಮತ್ತೆ ಉಲ್ಲಾಸಿಸಲಿ!

9 ನನ್ನ ಪಾಪಗಳನ್ನು ನೋಡಬೇಡ! ಅವುಗಳನ್ನೆಲ್ಲ ಅಳಿಸಿ ಬಿಡು!
10 ದೇವರೇ, ನನ್ನಲ್ಲಿ ಶುದ್ಧ ಹೃದಯವನ್ನು ನಿರ್ಮಿಸು! ನನ್ನ ಆತ್ಮವನ್ನು ಮತ್ತೆ ಬಲಗೊಳಿಸು!
11 ನಿನ್ನ ಸನ್ನಿಧಿಯಿಂದ ನನ್ನನ್ನು ತಳ್ಳಿಬಿಡಬೇಡ! ನಿನ್ನ ಪವಿತ್ರಾತ್ಮನನ್ನು ನನ್ನಿಂದ ತೆಗೆಯಬೇಡ!
12 ನಿನ್ನ ರಕ್ಷಣೆಯಿಂದುಂಟಾಗುವ ಆನಂದವನ್ನು ನನಗೆ ಕೊಡು! ನಿನಗೆ ವಿಧೇಯನಾಗಿರಲು ನನ್ನ ಮನಸ್ಸನ್ನು ದೃಢಪಡಿಸು.
13 ನಿನ್ನ ಜೀವಮಾರ್ಗವನ್ನು ನಾನು ಪಾಪಿಗಳಿಗೆ ಉಪದೇಶಿಸುವೆನು; ಆಗ ಅವರು ನಿನ್ನ ಬಳಿಗೆ ಹಿಂತಿರುಗಿ ಬರುವರು.
14 ದೇವರೇ, ನನ್ನನ್ನು ಮರಣದಂಡನೆಯಿಂದ ತಪ್ಪಿಸು. ನನ್ನ ದೇವರೇ, ನನ್ನನ್ನು ರಕ್ಷಿಸುವಾತನು ನೀನೇ. ನಿನ್ನ ಒಳ್ಳೆಯ ತನವನ್ನು ಕುರಿತು ನಾನು ಹಾಡುವೆನು!
15 ನನ್ನ ಯೆಹೋವನೇ, ನನ್ನ ಬಾಯಿ ತೆರೆದು ನಿನ್ನನ್ನು ಕೊಂಡಾಡುವೆನು.
16 ನಿನಗೆ ನಿಜವಾಗಿಯೂ ಬೇಕಾದದ್ದು ಯಜ್ಞಗಳಲ್ಲ. ಹೀಗಿರಲು ನಿನಗೆ ಇಷ್ಟವೇ ಇಲ್ಲದ ಯಜ್ಞಗಳನ್ನು ನಾನೇಕೆ ಅರ್ಪಿಸಲಿ!
17 ದೇವರೇ, ನೀನು ಅಪೇಕ್ಷಿಸುವ ಯಜ್ಞ ದೀನ ಮನಸ್ಸೇ. ದೀನತೆಯೂ ವಿಧೇಯತೆಯೂ ಉಳ್ಳ ಹೃದಯವನ್ನು ನೀನು ತಿರಸ್ಕರಿಸುವುದಿಲ್ಲ.
18 ಚೀಯೋನಿಗೆ ಕರುಣೆ ತೋರಿ ಜೆರುಸಲೇಮಿನ ಕೋಟೆಗಳನ್ನು ಮತ್ತೆ ನಿರ್ಮಿಸು.
19 ಆಗ ಜನರು ಯಜ್ಞಗಳನ್ನೂ ಸರ್ವಾಂಗ ಹೋಮಗಳನ್ನೂ ಅರ್ಪಿಸಿ ನಿನಗೆ ಸಂತೋಷವನ್ನು ಉಂಟುಮಾಡುವರು. ಜನರು ನಿನ್ನ ಯಜ್ಞವೇದಿಕೆಯ ಮೇಲೆ ಹೋರಿಗಳನ್ನು ಮತ್ತೆ ಅರ್ಪಿಸುವರು.

## ಕೀರ್ತನೆ 52

*ಎದೋಮ್ಯನಾದ ದೋಯೇಗನು ಸೌಲನ ಬಳಿಗೆ ಹೋಗಿ, ''ದಾವೀದನು ಅಹೀಮೆಲೆಕನ ಮನೆಯಲ್ಲಿದ್ದಾನೆ'' ಎಂದು ತಿಳಿಸಿದಾಗ ರಚಿಸಲ್ಪಟ್ಟ ಕೀರ್ತನೆಯಿದು.*

*ರಚನೆಗಾರ: ದಾವೀದ*

1 ದುಷ್ಟಾಧಿಕಾರಿಯೇ, ನಿನ್ನ ದುಷ್ಕೃತ್ಯಗಳ ಕುರಿತು ಜಂಬಪಡುವುದೇಕೆ? ದೇವರ ದೃಷ್ಟಿಗೆ ನೀನು ಅಸಹ್ಯಕರವಾಗಿರುವೆ.
2 ಮೋಸಗಾರನೇ, ನಿನ್ನ ನಾಲಗೆಯು ಹರಿತವಾದ ಕ್ಷೌರಕತ್ತಿಯಂತಿದ್ದು ನಾಶನದ ಸಂಚುಗಳನ್ನೇ ಮಾಡುವುದು.
3 ಒಳ್ಳೆಯದಕ್ಕಿಂತಲೂ ಕೆಟ್ಟದ್ದನ್ನೇ ನೀನು ಹೆಚ್ಚು ಪ್ರೀತಿಸುವೆ. ನಿನಗೆ ಸತ್ಯಕ್ಕಿಂತಲೂ ಸುಳ್ಳೇ ಇಷ್ಟ.
4 ಮೋಸದ ನಾಲಿಗೆಯೇ, ಹಾನಿಕರವಾದ ಮಾತುಗಳೇ ನಿನಗೆ ಇಷ್ಟ.
5 ದೇವರು ನಿನ್ನನ್ನು ಶಾಶ್ವತವಾಗಿ ನಾಶಮಾಡುವನು, ಗಿಡವನ್ನು ಬೇರು ಸಹಿತ ಕಿತ್ತು ಹಾಕುವಂತೆ ಆತನು ನಿನ್ನನ್ನು ಹಿಡಿದು ನಿನ್ನ ಮನೆಯೊಳಗಿಂದ* ಎಳೆದು ಹಾಕುವನು,
6 ಒಳ್ಳೆಯವರು ಇದನ್ನು ಕಂಡು ದೇವರಲ್ಲಿ ಭಯಭಕ್ತಿ ಉಳ್ಳವರಾಗುವರು. ಅವರು ನಿಮ್ಮನ್ನು ನೋಡಿ ನಗುತ್ತಾ ಹೀಗೆನ್ನುವರು:
7 ''ದೇವರ ಮೇಲೆ ಅವಲಂಬಿಸಿಕೊಳ್ಳದ ಇವನಿಗೆ ಏನಾಯಿತು? ತನ್ನ ಐಶ್ವರ್ಯವೂ ಸುಳ್ಳುಗಳೂ ತನ್ನನ್ನು ಕಾಪಾಡುತ್ತವೆ ಎಂದು ಭಾವಿಸಿಕೊಂಡವನು ಇವನೇ.''
8 ನಾನಾದರೊ ದೇವರ ಆಲಯದ ಅಂಗಳದಲ್ಲಿ ಹಸಿರಸಿರಾಗಿ ಬೆಳೆಯುವ ಆಲೀವ್ ಮರದಂತಿದ್ದೇನೆ. ನಾನು ದೇವರ ಶಾಶ್ವತವಾದ ಪ್ರೀತಿಯಲ್ಲೇ ಯಾವಾಗಲೂ ಭರವಸವಿಟ್ಟಿರುವೆ.
9 ದೇವರೇ, ನಿನ್ನ ಕಾರ್ಯಗಳಿಗಾಗಿ ನಾನು ನಿನ್ನನ್ನು ಎಂದೆಂದಿಗೂ ಕೊಂಡಾಡುವೆನು. ನಿನ್ನ ಹೆಸರಿನಲ್ಲೇ ಭರವಸವಿಟ್ಟಿರುವೆ; ಯಾಕಂದರೆ ನಿನ್ನ ಹೆಸರು ಎಷ್ಟೋ ಒಳ್ಳೆಯದು. ನಿನ್ನ ಪವಿತ್ರ ಜನರ ಸನ್ನಿಧಿಯಲ್ಲಿ ನಿನ್ನನ್ನು ಕೊಂಡಾಡುವೆನು.

## ಕೀರ್ತನೆ 53

*ರಚನೆಗಾರ: ದಾವೀದ*

1 ಮೂಢನು ದೇವರಿಲ್ಲವೆಂದು ಮನಸ್ಸಿನಲ್ಲಿ ಅಂದುಕೊಳ್ಳುವನು. ಅವರು ಕೆಟ್ಟುಹೋಗಿದ್ದಾರೆ; ದುಷ್ಕೃತ್ಯಗಳನ್ನು ನಡೆಸುವವರಾಗಿದ್ದಾರೆ. ಅವರು ಒಳ್ಳೆಯದನ್ನು ಮಾಡುವುದೇ ಇಲ್ಲ.
2 ಮನುಷ್ಯರಲ್ಲಿ ತನಗೋಸ್ಕರ ಹುಡುಕುತ್ತಿರುವ ಬುದ್ಧಿವಂತರು ಇದ್ದಾರೊ ಎಂದು ದೇವರು ಪರಲೋಕದಿಂದ ನೋಡುತ್ತಿದ್ದಾನೆ.
3 ಆದರೆ ಪ್ರತಿಯೊಬ್ಬರೂ ದೇವರಿಗೆ ವಿಮುಖರಾಗಿದ್ದಾರೆ. ಪ್ರತಿಯೊಬ್ಬನೂ ಕೆಟ್ಟುಹೋಗಿದ್ದಾನೆ. ಯಾವನೂ ಒಳ್ಳೆಯದನ್ನು ಮಾಡುತ್ತಿಲ್ಲ. ಇಲ್ಲ, ಒಬ್ಬನಾದರೂ ಮಾಡುತ್ತಿಲ್ಲ!
4 ದೇವರು ಇಂತೆನ್ನುತ್ತಾನೆ: ''ಆ ದುಷ್ಟರಿಗೆ ಖಂಡಿತವಾಗಿ ಸತ್ಯವು ತಿಳಿದಿದೆ! ಆದರೆ ಅವರು ನನ್ನಲ್ಲಿ ಪ್ರಾರ್ಥಿಸುತ್ತಿಲ್ಲ. ಆಹಾರ ತಿನ್ನುವಂತೆ ಅವರು ನನ್ನ ಜನರನ್ನು ನಾಶಮಾಡಲು ಸಿದ್ಧರಾಗಿದ್ದಾರೆ.''

---

**ಮನೆಯೊಳಗಿಂದ** ಇದರ ಅರ್ಥ ದೇಹ. ದೇವರು ಈ ವ್ಯಕ್ತಿಯನ್ನು ಕೊಲ್ಲುತ್ತಾನೆ ಎಂದು ತಿಳಿಸುವ ಪದ್ಯರೂಪವಿದು.

5 ಆ ದುಷ್ಟರು ಹಿಂದೆಂದೂ ಭಯಗೊಂಡಿಲ್ಲದ ರೀತಿ
ಯಲ್ಲಿ ಭಯಭ್ರಾಂತರಾಗುವರು! ಅವರು ಇಸ್ರೇಲರ
ಶತ್ರುಗಳು. ದೇವರು ಅವರನ್ನು ತಿರಸ್ಕರಿಸಿದ್ದಾನೆ. ಆದ್ದ
ರಿಂದ ದೇವಜನರು ಅವರನ್ನು ಸೋಲಿಸುವರು,
ದೇವರು ಆ ದುಷ್ಟರ ಎಲುಬುಗಳನ್ನು ಚದರಿಸಿ
ಬಿಡುವನು.
6 ಚೀಯೋನ್ ಪರ್ವತದ ಮೇಲಿರುವಾತನು ಇಸ್ರೇಲಿಗೆ
ಜಯವನ್ನು ತರುವನು! ಆಗ ದೇವರು ತನ್ನ ಜನರನ್ನು
ಸೆರೆವಾಸದಿಂದ ಬರಮಾಡುವನು. ಯಾಕೋಬನೇ
ಉಲ್ಲಾಸಿಸು! ಇಸ್ರೇಲೇ ಬಹುಸಂತೋಷಪಡು.

## ಕೀರ್ತನೆ 54

*ಜಿಫೆಂಬ ಸ್ಥಳದವರು ಸೌಲನ ಬಳಿಗೆ ಹೋಗಿ, ''ದಾವೀದನು ನಮ್ಮಲ್ಲಿ ಅಡಗಿಕೊಂಡಿದ್ದಾನೆ'' ಎಂದು ತಿಳಿಸಿದಾಗ ರಚಿಸಲ್ಪಟ್ಟ ಕೀರ್ತನೆಯಿದು. ರಚನೆಗಾರ: ದಾವೀದ*

1 ದೇವರೇ, ನಿನ್ನ ಹೆಸರಿನಿಂದ ನನ್ನನ್ನು ರಕ್ಷಿಸು! ನಿನ್ನ
ಮಹಾಶಕ್ತಿಯಿಂದ ನನ್ನನ್ನು ಬಿಡಿಸು.
2 ದೇವರೇ, ನನ್ನ ಪ್ರಾರ್ಥನೆಗೆ ಕಿವಿಗೊಡು. ನನ್ನ
ಮಾತಗಳನ್ನು ಕೇಳು.
3 ದೇವರ ಕುರಿತು ಆಲೋಚಿಸದ ಅನ್ಯರು ನನಗೆ
ವಿರೋಧವಾಗಿ ತಿರುಗಿದ್ದಾರೆ. ಆ ಬಲಾತ್ಕಾರಿಗಳು
ನನ್ನನ್ನು ಕೊಲ್ಲಲು ಪ್ರಯತ್ನಿಸುತ್ತಿದ್ದಾರೆ.
4 ಇಗೋ, ನನ್ನ ದೇವರೇ ನನಗೆ ಸಹಾಯಮಾಡುವನು.
ನನ್ನ ಒಡೆಯನೇ ನನಗೆ ಆಧಾರ ನೀಡುವನು.
5 ನನಗೆ ವಿರೋಧವಾಗಿ ತಿರುಗಿರುವ ಜನರನ್ನು ನನ್ನ
ದೇವರು ದಂಡಿಸುವನು. ದೇವರು ನನಗೆ ನಂಬಿಗಸ್ತ
ನಾಗಿದ್ದಾನೆ. ಆತನು ಅವರನ್ನು ನಾಶಮಾಡುವನು.
6 ದೇವರೇ, ನಾನು ನಿನಗೆ ಸ್ವಇಚ್ಛೆಯಿಂದ ಯಜ್ಞಗಳನ್ನು
ಅರ್ಪಿಸುವೆನು. ಯೆಹೋವನೇ, ನಿನ್ನ ಒಳ್ಳೆಯ
ಹೆಸರನ್ನು ನಾನು ಕೊಂಡಾಡುವೆನು.
7 ಯಾಕಂದರೆ ನನ್ನೆಲ್ಲಾ ಆಪತ್ತುಗಳಿಂದ ರಕ್ಷಿಸಿದಾತನು
ನೀನೇ. ನನ್ನ ವೈರಿಗಳಿಗಾದ ಸೋಲನ್ನು ನಾನು
ಕಣ್ಣಾರೆ ಕಂಡೆನು.

## ಕೀರ್ತನೆ 55

*ರಚನೆಗಾರ: ದಾವೀದ*

1 ದೇವರೇ, ನನ್ನ ಪ್ರಾರ್ಥನೆಯನ್ನು ಕೇಳು. ನನ್ನ
ವಿಜ್ಞಾಪನೆಗೆ ಕಿವಿಗೊಡು.
2 ನನ್ನ ಮೊರೆಯನ್ನು ಆಲಿಸಿ ಸದುತ್ತರವನ್ನು ದಯ
ಪಾಲಿಸು. ನಾನು ನಿನ್ನೊಂದಿಗೆ ಮಾತಾಡುವೆನು; ನನ
ಗಾಗಿರುವ ದುಃಖವನ್ನು ನಿನ್ನ ಮುಂದೆ ತೋಡಿ
ಕೊಳ್ಳುವೆನು.
3 ನನ್ನ ವೈರಿ ನನ್ನ ಬಗ್ಗೆ ಕೆಟ್ಟದ್ದನ್ನೇ ಹೇಳಿದನು. ಆ
ದುಷ್ಟನು ನನ್ನ ಮೇಲೆ ಅಬ್ಬರಿಸಿದನು. ನನ್ನ ವೈರಿಗಳು
ಕೋಪದಿಂದ ನನ್ನ ಮೇಲೆ ಆಕ್ರಮಣ ಮಾಡಿದರು.
ಅವರು ನನ್ನ ಮೇಲೆ ಆಪತ್ತುಗಳನ್ನು ಬರಮಾಡಿದರು.
4 ನನ್ನ ಹೃದಯ ಬಡಿತವು ಮಿತಿಮೀರಿದೆ; ಮರಣ
ಭಯವು ನನ್ನನ್ನು ಆವರಿಸಿಕೊಂಡಿದೆ.
5 ನಾನು ಭಯದಿಂದ ನಡುಗುತ್ತಿದ್ದೇನೆ. ನಾನು ದಿಗಿಲು
ಗೊಂಡಿದ್ದೇನೆ.
6 ಆಹಾ, ನನಗೆ ಪಾರಿವಾಳದಂತೆ ರೆಕ್ಕೆಗಳಿದ್ದರೆ, ನಾನು
ಹಾರಿಹೋಗಿ ಆಶ್ರಯ ಸೇರಿಕೊಳ್ಳುತ್ತಿದ್ದೆನು.
7 ನಾನು ಅರಣ್ಯದಲ್ಲಿ ಬಹು ದೂರಕ್ಕೆ ಹಾರಿ
ಹೋಗುತ್ತಿದ್ದೆನು.
8 ನಾನು ಓಡಿಹೋಗಿ ಹಾನಿಕರವಾದ ಈ ಬಿರುಗಾಳಿ
ಯಿಂದ ತಪ್ಪಿಸಿಕೊಳ್ಳುತ್ತಿದ್ದೆನು.
9-10 ನನ್ನ ಒಡೆಯನೇ, ಅವರ ಸುಳ್ಳುಗಳನ್ನು ನಿಲ್ಲಿಸು.
ಈ ಪಟ್ಟಣದಲ್ಲಿ ಹಿಂಸೆಯೂ ಕಲಹವೂ ಕಾಣುತ್ತಿದೆ.
ಹಗಲಿರುಳು, ಈ ನಗರದಲ್ಲೆಲ್ಲಾ ಅಪರಾಧ ಮತ್ತು
ಬಲಾತ್ಕಾರಗಳು ತುಂಬಿಕೊಂಡಿವೆ.
11 ಬೀದಿಗಳಲ್ಲಿ ಅಪರಾಧಗಳು ಅತಿಯಾಗಿವೆ. ಜನರು
ಎಲ್ಲೆಲ್ಲಿಯೂ ಸುಳ್ಳು ಹೇಳಿ ಮೋಸಮಾಡುತ್ತಿದ್ದಾರೆ.
12 ನನಗೆ ಅವಮಾನ ಮಾಡುವವನು ವೈರಿಯಾಗಿದ್ದಿದ್ದರೆ
ತಾಳಿಕೊಳ್ಳಬಹುದಿತ್ತು. ನನ್ನ ಮೇಲೆ ಆಕ್ರಮಣ
ಮಾಡುವವರು ನನ್ನ ಶತ್ರುಗಳಾಗಿದ್ದಿದ್ದರೆ ಅಡಗಿ
ಕೊಳ್ಳಬಹುದಿತ್ತು.
13 ಆದರೆ ನನಗೆ ಕೇಡು ಮಾಡುತ್ತಿರುವವನು ನನ್ನ
ಸಂಗಡಿಗನಾದ ನೀನೇ; ನನ್ನ ಸಹೋದ್ಯೋಗಿಯೂ
ನನ್ನ ಸ್ನೇಹಿತನೂ ಆದ ನೀನೇ.
14 ನಾವು ಜನಸಮೂಹದ ನಡುವೆ ದೇವಾಲಯಕ್ಕೆ
ಹೋಗುವಾಗ, ಗುಟ್ಟಾದ ವಿಷಯಗಳನ್ನು ಮಾತಾ
ಡುತ್ತಿದ್ದೆವಲ್ಲಾ!
15 ನನ್ನ ಶತ್ರುಗಳಿಗೆ ಮರಣವು ಇದ್ದಕ್ಕಿದ್ದಂತೆ ಬರಲಿ!
ಭೂಮಿಯು ಬಾಯ್ದೆರೆದು ಅವರನ್ನು ಜೀವಂತವಾಗಿ
ನುಂಗಿಬಿಡಲಿ! ಯಾಕಂದರೆ ಅವರು ಒಟ್ಟಾಗಿ
ಸೇರಿ ಅಂಥಾ ಬಯಂಕರವಾದವುಗಳನ್ನು
ಆಲೋಚಿಸುವರು.
16 ನಾನು ಸಹಾಯಕ್ಕಾಗಿ ದೇವರಲ್ಲಿ ಮೊರೆಯಿಡುವೆನು.
ಯೆಹೋವನು ನನಗೆ ಉತ್ತರಕೊಡುವನು.
17 ನಾನು ದೇವರೊಂದಿಗೆ ಸಾಯಂಕಾಲದಲ್ಲಿಯೂ
ಮುಂಜಾನೆಯಲ್ಲಿಯೂ ಮಧ್ಯಾಹ್ನದಲ್ಲಿಯೂ
ಮಾತಾಡುವೆನು. ನನಗಾಗಿರುವ ದುಃಖವನ್ನು ಆತನಿಗೆ
ಹೇಳಿಕೊಳ್ಳುವೆನು. ಆತನು ನನಗೆ ಕಿವಿಗೊಡುವನು!
18 ನಾನು ಅನೇಕ ಯುದ್ಧಗಳಲ್ಲಿ ಹೋರಾಡಿದ್ದೇನೆ.
ಆದರೆ ಪ್ರತಿಸಲವೂ ದೇವರು ನನ್ನನ್ನು ಪಾರುಮಾಡಿ,
ಸುರಕ್ಷಿತವಾಗಿ ಬರಮಾಡಿದನು.

19 ದೇವರು ನನಗೆ ಕಿವಿಗೊಡುವನು. ನಿತ್ಯಕಾಲದ ರಾಜನು ನನಗೆ ಸಹಾಯ ಮಾಡುವನು.
20 ನನ್ನ ವೈರಿಗಳು ತಮ್ಮ ಜೀವಿತಗಳನ್ನು ಪರಿವರ್ತಿಸಿಕೊಳ್ಳುವುದಿಲ್ಲ. ಅವರಿಗೆ ದೇವರಲ್ಲಿ ಭಯಭಕ್ತಿಯಿಲ್ಲ.
21 ನನ್ನ ವೈರಿಗಳು ತಮ್ಮ ಸ್ನೇಹಿತರ ಮೇಲೆಯೇ ಆಕ್ರಮಣ ಮಾಡುವರು; ತಮ್ಮ ಒಡಂಬಡಿಕೆಗಳನ್ನು ತಾವೇ ಉಲ್ಲಂಘಿಸುವರು.
22 ನನ್ನ ವೈರಿಗಳು ನಯ ನಾಜೂಕಿನಿಂದ ಶಾಂತಿಯ ಕುರಿತು ಮಾತಾಡುವರು; ಅಂತರಂಗದಲ್ಲಿಯೇ ಯುದ್ಧಗಳ ಕುರಿತು ಆಲೋಚಿಸುವರು. ಅವರ ಮಾತುಗಳು ಎಣ್ಣೆಯಂತೆ ನುಣುಪಾಗಿದ್ದರೂ ಬಿಚ್ಚುಗತ್ತಿಗಳೇ ಸರಿ.
23 ನಿನ್ನ ಚಿಂತಾಭಾರವನ್ನು ಯೆಹೋವನ ಮೇಲೆ ಹಾಕು. ಆತನು ನಿನ್ನನ್ನು ಉದ್ಧಾರ ಮಾಡುವನು. ಸಜ್ಜನರಿಗೆ ಸೋಲಾಗಲು ಯೆಹೋವನೆಂದಿಗೂ ಬಿಡನು.
24 ದೇವರೇ, ನೀನು ದುಷ್ಟರನ್ನು ಪಾತಾಳಕ್ಕೆ ದಬ್ಬಿಬಿಡುವೆ. ಕೊಲೆಪಾತಕರೂ ವಂಚಕರೂ ತಮ್ಮ ಅರ್ಧಾಯುಷ್ಯವೂ ಬದುಕರು. ನಾನಾದರೊ ನಿನ್ನನ್ನೇ ನಂಬಿಕೊಂಡಿರುವೆನು.

## ಕೀರ್ತನೆ 56

*ಗತ್ ಎಂಬ ಊರಲ್ಲಿ ಫಿಲಿಷ್ಟಿಯರು ಸೆರೆಹಿಡಿದಾಗ ರಚಿಸಿಲ್ಪಟ್ಟಿತು. ರಚನೆಗಾರ: ದಾವೀದ.*

1 ದೇವರೇ, ನನ್ನನ್ನು ಕರುಣಿಸು; ವೈರಿಗಳು ನನ್ನ ಮೇಲೆ ಆಕ್ರಮಣಮಾಡಿದ್ದಾರೆ. ಅವರು ಸತತವಾಗಿ ನನ್ನನ್ನು ಬೆನ್ನಟ್ಟಿ ಹೋರಾಡುತ್ತಿದ್ದಾರೆ.
2 ನನ್ನ ವೈರಿಗಳು ಸತತವಾಗಿ ನನ್ನ ಮೇಲೆ ಆಕ್ರಮಣ ಮಾಡುವರು. ಅವರಲ್ಲಿರುವ ಹೋರಾಟಗಾರರು ಅಸಂಖ್ಯಾತ.
3 ನಾನು ಭಯಗೊಂಡಾಗ, ನಿನ್ನಲ್ಲೇ ಭರವಸೆ ಇಡುವೆ.
4 ನಾನು ದೇವರಲ್ಲಿ ಭರವಸೆ ಇಟ್ಟಿರುವುದರಿಂದ ಜನರಿಗೆ ಭಯಪಡುವುದಿಲ್ಲ. ಕ್ಷಣಿಕ ಮಾನವನು ನನಗೇನು ಮಾಡಬಲ್ಲನು? ದೇವರ ವಾಗ್ದಾನಕ್ಕಾಗಿ ಅತನನ್ನು ಕೊಂಡಾಡುವೆನು.
5 ನನ್ನ ವೈರಿಗಳು ನನ್ನ ಮಾತುಗಳಿಗೆ ಅಪಾರ್ಥ ಮಾಡುವರು. ನನಗೆ ಕೇಡು ಮಾಡಬೇಕೆಂದೇ ಅವರು ಯಾವಾಗಲೂ ಯೋಚಿಸುವರು.
6 ಅವರು ಒಟ್ಟುಗೂಡಿ ನನ್ನನ್ನು ಕೊಲ್ಲಲು ನನ್ನ ಹೆಜ್ಜೆಯನ್ನೇ ಹಿಂಬಾಲಿಸಿಕೊಂಡು ಬರುತ್ತಾರೆ.
7 ದೇವರೇ, ಅವರ ದುಷ್ಟತನದ ನಿಮಿತ್ತ ಅವರನ್ನು ಸೆರೆಯಾಳುಗಳಾಗಿ ಕಳುಹಿಸು. ಅವರು ಅನ್ಯ ಜನಾಂಗಗಳ ಕೋಪವನ್ನು ಅನುಭವಿಸುವಂತೆ ಹೊರಗಟ್ಟು.
8 ನನಗಾಗಿರುವ ದುಃಖವು ನಿನಗೆ ಗೊತ್ತಿದೆ. ನಾನು ಎಷ್ಟು ಅತ್ತಿರುವೆನೆಂದು ನಿನಗೆ ಗೊತ್ತಿದೆ. ನನ್ನ ಕಣ್ಣೀರಿಗೆ ನೀನು ಖಂಡಿತವಾಗಿ ಲೆಕ್ಕವಿಟ್ಟಿರುವೆ.
9 ಆದ್ದರಿಂದ, ಸಹಾಯಕ್ಕಾಗಿ ನಾನು ನಿನಗೆ ಮೊರೆಯಿಡುವಾಗ ನನ್ನ ಶತ್ರುಗಳನ್ನು ಸೋಲಿಸು. ನೀನು ಮಾಡಬಲ್ಲೆ ಎಂದು ನನಗೆ ಗೊತ್ತಿದೆ; ನೀನೇ ದೇವರು!
10 ನಾನು ದೇವರನ್ನು ಆತನ ವಾಗ್ದಾನಕ್ಕಾಗಿ ಕೊಂಡಾಡುವೆನು. ಯೆಹೋವನು ನನಗೆ ಮಾಡಿರುವ ವಾಗ್ದಾನಕ್ಕಾಗಿ ನಾನು ಆತನನ್ನು ಕೊಂಡಾಡುವೆನು.
11 ನಾನು ದೇವರಲ್ಲಿ ಭರವಸವಿಟ್ಟಿರುವುದರಿಂದ ಭಯಪಡುವುದಿಲ್ಲ. ಜನರು ನನಗೇನೂ ಮಾಡಲಾರರು.
12 ದೇವರೇ, ನಾನು ನಿನಗೆ ವಿಶೇಷ ಹರಕೆಗಳನ್ನು ಮಾಡಿದ್ದೇನೆ. ನಾನು ಮಾಡಿದ ಹರಕೆಗಳನ್ನು ಸಲ್ಲಿಸುವೆನು. ನಾನು ನಿನಗೆ ಕೃತಜ್ಞತಾ ಕಾಣಿಕೆಯನ್ನು ಅರ್ಪಿಸುವೆನು.
13 ಯಾಕಂದರೆ ನೀನು ನನ್ನನ್ನು ಮರಣದಿಂದ ರಕ್ಷಿಸಿದೆ; ನೀನು ನನ್ನನ್ನು ಸೋಲಿನಿಂದ ತಪ್ಪಿಸಿದೆ. ಆದ್ದರಿಂದ, ಜೀವಂತರಾಗಿರುವ ಜನರು ಮಾತ್ರ ನೋಡಬಹುದಾದ ಬೆಳಕಿನಲ್ಲಿ ನಾನು ದೇವರನ್ನು ಆರಾಧಿಸುವೆನು.

## ಕೀರ್ತನೆ 57

*ಗುಹೆಯಲ್ಲಿ ಸೌಲನಿಂದ ಪಾರಾದಾಗ ರಚಿಸಲ್ಪಟ್ಟಿತ್ತು. ರಚನೆಗಾರ: ದಾವೀದ*

1 ದೇವರೇ, ನನ್ನನ್ನು ಕರುಣಿಸು, ನನ್ನನ್ನು ಕನಿಕರಿಸು. ನನ್ನ ಆತ್ಮವು ನಿನ್ನನ್ನೇ ಆಶ್ರಯಿಸಿಕೊಂಡಿದೆ. ಆಪತ್ತು ಕೊನೆಗೊಳ್ಳುವತನಕ ಸಂರಕ್ಷಣೆಗಾಗಿ ನಿನ್ನ ರೆಕ್ಕೆಗಳ ಮರೆಯನ್ನು ಆಶ್ರಯಿಸಿಕೊಳ್ಳುವೆನು.
2 ಸಹಾಯಕ್ಕಾಗಿ ಮಹೋನ್ನತನಾದ ದೇವರಿಗೆ ಮೊರೆಯಿಡುವೆನು. ಆತನು ನನ್ನ ಕೊರತೆಗಳನ್ನೆಲ್ಲಾ ನೀಗಿಸುವನು.
3 ಆತನು ಪರಲೋಕದಿಂದ ನನಗೆ ಸಹಾಯ ಮಾಡಿ, ನನ್ನನ್ನು ಕಾಡಿಸುವವರನ್ನು ಸೋಲಿಸುವನು. ದೇವರು ತನ್ನ ಪ್ರೀತಿಯನ್ನೂ ನಂಬಿಗಸ್ತಿಕೆಯನ್ನೂ ತೋರ್ಪಡಿಸುವನು.
4 ನನ್ನ ಪ್ರಾಣವು ಅಪಾಯದಲ್ಲಿದೆ. ನನ್ನ ಶತ್ರುಗಳು ನನ್ನನ್ನು ಮುತ್ತಿಕೊಂಡಿದ್ದಾರೆ. ಅವರು ಸಿಂಹಗಳಂತಿದ್ದಾರೆ. ಅವರ ಹಲ್ಲುಗಳು ಬಾಣಗಳಂತಿವೆ; ಅವರ ನಾಲಿಗೆಗಳು ಹರಿತವಾದ ಖಡ್ಗಗಳಂತಿವೆ.
5 ದೇವರೇ, ಪರಲೋಕದಲ್ಲಿ ನಿನ್ನ ಪ್ರಭಾವವು ಮೆರೆಯಲಿ. ನಿನ್ನ ಮಹಿಮೆಯು ಭೂಮಂಡಲವನ್ನೆಲ್ಲಾ ಆವರಿಸಿಕೊಳ್ಳಲಿ.
6 ನನ್ನನ್ನು ಬಂಧಿಸಲು ನನ್ನ ವೈರಿಗಳು ನನಗೆ ಬಲೆಯೊಡ್ಡಿದ್ದಾರೆ. ನನ್ನನ್ನು ಬೀಳಿಸಲು ಕುಣಿ ತೋಡಿದರು. ಆದರೆ ಅವರೇ ಅದರಲ್ಲಿ ಬಿದ್ದುಹೋದರು.

7 ದೇವರೇ, ನನ್ನ ಹೃದಯವು ಸ್ಥಿರವಾಗಿದೆ; ನನ್ನ ಹೃದಯವು ದೃಢವಾಗಿದೆ. ನಾನು ವಾದ್ಯ ಬಾರಿಸುತ್ತಾ ಹಾಡುವೆನು.
8 ನನ್ನ ಮನವೇ, ಎಚ್ಚರಗೊಳ್ಳು! ಹಾರ್ಪ್ ಮತ್ತು ಲೈರ್ ವಾದ್ಯಗಳೇ, ಎಚ್ಚರಗೊಳ್ಳಿರಿ. ಸಂಕೀರ್ತನೆಯಿಂದ ಸೂರ್ಯೋದಯವನ್ನು ಎದುರುಗೊಳ್ಳೋಣ.
9 ನನ್ನ ಒಡೆಯನೇ, ಜನಾಂಗಗಳ ನಡುವೆ ನಿನ್ನನ್ನು ಕೊಂಡಾಡುವೆನು. ಎಲ್ಲಾ ದೇಶಗಳಲ್ಲಿ ನಿನಗೆ ಸ್ತುತಿಗೀತೆಗಳನ್ನು ಹಾಡುವೆನು.
10 ಯಾಕಂದರೆ ನಿನ್ನ ಪ್ರೀತಿಯು ಮುಗಿಲನ್ನು ಮುಟ್ಟುವಷ್ಟೂ ನಿನ್ನ ನಂಬಿಗಸ್ತಿಕೆಯು ಆಕಾಶವನ್ನು ನಿಲುಕುವಷ್ಟೂ ದೊಡ್ಡದಾಗಿದೆ.
11 ದೇವರೇ, ಪರಲೋಕದಲ್ಲಿ ನಿನ್ನ ಪ್ರಭಾವವು ಮೆರೆಯಲಿ. ನಿನ್ನ ಮಹಿಮೆಯು ಭೂಮಂಡಲವನ್ನೆಲ್ಲಾ ಆವರಿಸಿಕೊಳ್ಳಲಿ.

## ಕೀರ್ತನೆ 58

*ರಚನೆಗಾರ: ದಾವೀದ*

1 ಅಧಿಪತಿಗಳೇ, ನಿಮ್ಮ ತೀರ್ಪುಗಳು ನ್ಯಾಯವಾಗಿವೆಯೋ? ನ್ಯಾಯಾಧಿಪತಿಗಳೇ, ನಿಮ್ಮ ತೀರ್ಪುಗಳು ಯಥಾರ್ಥವಾಗಿವೆಯೋ?
2 ಇಲ್ಲ, ನಿಮ್ಮ ಆಲೋಚನೆಗಳೆಲ್ಲಾ ದುಷ್ಟತನವೇ; ನೀವು ಭೂಲೋಕದಲ್ಲಿ ತೂಗಿಕೊಡುವುದು ಅನ್ಯಾಯವನ್ನೇ.
3 ಆ ದುಷ್ಟರು ಹುಟ್ಟಿದಾಕ್ಷಣದಿಂದ ತಪ್ಪನ್ನು ಮಾಡತೊಡಗಿದರು. ಅವರು ಹುಟ್ಟಿದಂದಿನಿಂದ ಸುಳ್ಳುಗಾರರಾಗಿದ್ದಾರೆ.
4 ಅವರ ಕೋಪವು ನಾಗರಹಾವಿನ ವಿಷದಷ್ಟೇ ಅಪಾಯಕರ.* ಕಿವುಡು ನಾಗರಹಾವಿನಂತೆ ಅವರು ಸತ್ಯಕ್ಕೆ ಕಿವಿಗೊಡುವುದಿಲ್ಲ.
5 ಕಿವುಡು ನಾಗರಹಾವುಗಳು ಹಾವಾಡಿಗರ ಕೊಳಲನಾದವನ್ನು ಕೇಳಲಾರವು. ಆ ದುಷ್ಟರು ದುಷ್ಟಾಲೋಚನೆಗಳನ್ನು ಮಾಡುವಾಗ ಕಿವುಡು ನಾಗರಹಾವುಗಳಂತಿರುವರು.
6 ಯೆಹೋವನೇ, ಅವರು ಸಿಂಹಗಳಂತಿದ್ದಾರೆ. ಯೆಹೋವನೇ, ಅವರ ಹಲ್ಲುಗಳನ್ನು ಮುರಿದುಹಾಕು.
7 ಹರಿದು ಕಾಣದೆ ಹೋಗುವ ನೀರಿನಂತೆ ಆ ಜನರು ಕಾಣದೆ ಹೋಗಲಿ. ಹಾದಿಯ ಮೇಲಿರುವ ಕಳೆಯಂತೆ ಅವರು ಜಜ್ಜಿಹೋಗಲಿ.
8 ಬಸವನಹುಳಗಳು ದಾರಿಯಲ್ಲೇ ಕರಗಿಹೋಗುವಂತೆ ಅವರೂ ಕರಗಿಹೋಗಲಿ. ಗರ್ಭದಲ್ಲೇ ಸತ್ತುಹೋದ ಮಗುವಿನಂತೆ ಅವರು ಹಗಲನ್ನು ಕಾಣದಂತಾಗಲಿ.
9 ಒಲೆಯಲ್ಲಿ ಉರಿದುಹೋಗುವ ಮುಳ್ಳುಕಡ್ಡಿಗಳಂತೆ ಅವರು ಬೇಗನೆ ನಾಶವಾಗಲಿ.
10 ದುಷ್ಟರಿಗಾಗುವ ಪ್ರತಿದಂಡನೆಯನ್ನು ನೀತಿವಂತರು ಕಂಡು ಹರ್ಷಿಸುವರು; ಆ ದುಷ್ಟರ ರಕ್ತದಲ್ಲಿ ಕಾಲಾಡಿಸುವರು.
11 ಆಗ ಜನರೆಲ್ಲರು, ‘‘ನೀತಿವಂತರಿಗೆ ಪ್ರತಿಫಲ ಸಿಕ್ಕೇ ಸಿಕ್ಕವುದು; ಲೋಕಕ್ಕೆ ತೀರ್ಪು ನೀಡುವ ದೇವರಿರುವುದು ಸತ್ಯವೇ ಸರಿ’’ ಎಂದು ಹೇಳುವರು.

## ಕೀರ್ತನೆ 59

*ಸೌಲನು ದಾವೀದನನ್ನು ಕೊಲ್ಲಲು ಮುತ್ತಿಗೆ ಹಾಕಿದಾಗ ರಚಿಸಲ್ಪಟ್ಟಿತು. ರಚನೆಗಾರ: ದಾವೀದ*

1 ದೇವರೇ, ನನ್ನ ವೈರಿಗಳಿಂದ ನನ್ನನ್ನು ಬಿಡಿಸು. ನನಗೆ ವಿರೋಧವಾಗಿ ಎದ್ದಿರುವ ಜನರಿಂದ ನನ್ನನ್ನು ಸಂರಕ್ಷಿಸು.
2 ಆ ದುಷ್ಟರಿಂದ ನನ್ನನ್ನು ವಿಮೋಚಿಸು. ಆ ಕೊಲೆಪಾತಕರಿಂದ ನನ್ನನ್ನು ರಕ್ಷಿಸು.
3 ಇಗೋ, ನನ್ನನ್ನು ಕೊಲ್ಲಲು ಬಲಿಷ್ಠರು ಹೊಂಚುಹಾಕಿದ್ದಾರೆ. ಆದರೆ ನಾನು ಪಾಪವನ್ನಾಗಲೀ ಅಪರಾಧವನ್ನಾಗಲೀ ಮಾಡಿಲ್ಲ.
4 ಅವರು ನನ್ನ ಮೇಲೆ ಆಕ್ರಮಣ ಮಾಡಲು ಬರುತ್ತಿದ್ದಾರೆ, ಆದರೆ ನಾನೇನು ತಪ್ಪು ಮಾಡಿಲ್ಲ. ಯೆಹೋವನೇ, ಸ್ವತಃ ನೀನೇ ಬಂದು ನೋಡು!
5 ಸರ್ವಶಕ್ತನಾದ ಯೆಹೋವನೇ, ಇಸ್ರೇಲರ ದೇವರೇ, ಎದ್ದೇಳು! ಅವರನ್ನು ದಂಡಿಸು! ಆ ದುಷ್ಟ ದ್ರೋಹಿಗಳಿಗೆ ಕರುಣೆಯನ್ನೇ ತೋರಬೇಡ.
6 ಗುರುಗುಟ್ಟುತ್ತಾ ಬೀದಿಗಳಲ್ಲಿ ಅಡ್ಡಾಡುವ ನಾಯಿಗಳಂತೆ ಅವರು ಸಾಯಂಕಾಲದಲ್ಲಿ ಪಟ್ಟಣದಲ್ಲೆಲ್ಲಾ ಸುತ್ತಾಡುತ್ತಾರೆ.
7 ತಮ್ಮ ನಾಲಿಗೆಗಳೇ ಆಯುಧಗಳೊ ಎಂಬಂತೆ ಅಪಮಾನಕರವಾದ ನುಡಿಗಳನ್ನು ಬೊಗಳುತ್ತಾರೆ. ಯಾರು ಕೇಳಿಸಿ ಕೊಂಡರೂ ಅವರಿಗೆ ಚಿಂತೆಯಿಲ್ಲ.
8 ಯೆಹೋವನೇ, ಅವರನ್ನು ನೋಡಿ ನಗು. ಅವರೆಲ್ಲರನ್ನು ಅಪಹಾಸ್ಯ ಮಾಡು.
9 ನನ್ನ ಬಲವೇ, ನಿನ್ನನ್ನೇ ನಿರೀಕ್ಷಿಸಿಕೊಂಡಿದ್ದೇನೆ. ದೇವರೇ, ಬೆಟ್ಟಗಳ ಶಿಖರದಲ್ಲಿರುವ ಆಶ್ರಯದುರ್ಗ ನೀನೇ.
10 ದೇವರು ನನ್ನನ್ನು ಪ್ರೀತಿಸುವನು; ನನ್ನ ಜಯಕ್ಕೆ ಆತನೇ ಸಹಾಯಮಾಡುವನು. ನನ್ನ ಶತ್ರುಗಳನ್ನು ಸೋಲಿಸಲು ಆತನೇ ನನಗೆ ನೆರವು ನೀಡುವನು.

---

**ವಿಷದಷ್ಟೇ ಅಪಾಯಕರ** ಇದು ಶಬ್ದ ಚಮತ್ಕಾರ. ಹೀಬ್ರೂ ಪದ ‘‘ಬಿಸಿಕೋಪ’’ವು ‘‘ಸುಡುವ ವಿಷವು’’ ಎಂಬಂತೆ ಉಚ್ಚರಿಸಲ್ಪಡುತ್ತದೆ.

11 ಯೆಹೋವನೇ, ಅವರನ್ನು ಕೇವಲ ಕೊಲ್ಲಬೇಡ, ಇಲ್ಲವಾದರೆ, ನನ್ನ ಜನರು ಮರೆತುಬಿಡಬಹುದು. ನನ್ನ ಒಡೆಯನೇ, ಸಂರಕ್ಷಕನೇ, ಅವರನ್ನು ಚದರಿಸಿ ಬಿಡು; ನಿನ್ನ ಬಲದಿಂದ ಅವರನ್ನು ಸೋಲಿಸಿಬಿಡು.

12 ಆ ದುಷ್ಟರು ಶಪಿಸುತ್ತಾರೆ, ಸುಳ್ಳಾಡುತ್ತಾರೆ. ಅವರ ಮಾತುಗಳ ನಿಮಿತ್ತವೇ ಅವರನ್ನು ದಂಡಿಸು. ಅವರು ತಮ್ಮ ಗರ್ವದಿಂದಲೇ ಸಿಕ್ಕಿಬೀಳಲಿ.

13 ನೀನು ಅವರನ್ನು ಕೋಪದಿಂದ ನಾಶಮಾಡು. ಅವರನ್ನು ಸಂಪೂರ್ಣವಾಗಿ ನಾಶಮಾಡು. ಇಸ್ರೇಲನ್ನು ಆಳುತ್ತಿರುವವನು ನೀನೇ ಎಂದು ಆಗ ಲೋಕದವರಿಗೆಲ್ಲಾ ಗೊತ್ತಾಗುವುದು.

14 ಅವರು ಪ್ರತಿ ಸಾಯಂಕಾಲ ಬಂದು ಗುರುಗುಟ್ಟುವ ನಾಯಿಗಳಂತೆ ಪಟ್ಟಣದಲ್ಲೆಲ್ಲಾ ಅಡ್ಡಾಡುವರು.

15 ಅವರು ಊಟಕ್ಕಾಗಿ ಹುಡುಕಾಡಿದರೂ ಸಿಕ್ಕುವುದಿಲ್ಲ; ಮಲಗಲು ಸ್ಥಳವೂ ಸಿಕ್ಕುವುದಿಲ್ಲ.

16 ನಾನಾದರೋ ಮುಂಜಾನೆ ನಿನಗೆ ಸ್ತುತಿಗೀತೆಗಳನ್ನು ಹಾಡುವೆ; ನಿನ್ನ ಪ್ರೀತಿಯ ಕುರಿತು ಕೊಂಡಾಡುವೆನು; ಯಾಕಂದರೆ ಇಕ್ಕಟ್ಟಿನಲ್ಲಿ ನೀನೇ ನನಗೆ ಆಶ್ರಯ ದುರ್ಗ ವಾಗಿರುವೆ.

17 ನಾನು ನಿನಗೆ ಸ್ತುತಿಗೀತೆಗಳನ್ನು ಹಾಡುವೆ. ಯಾಕಂದರೆ ನೀನೇ ನನಗೆ ಆಶ್ರಯದುರ್ಗ ವಾಗಿರುವೆ. ನನ್ನನ್ನು ಪ್ರೀತಿಸುವ ದೇವರು ನೀನೇ!.

## ಕೀರ್ತನೆ 60

*ದಾವೀದನು ಅರಾಮ್ ನಹಾರಾಯಿಮ್ ಮತ್ತು ಅರಾಮ್ ಜೋಬಾ ಎಂಬುವರೊಂದಿಗೆ ಹೋರಾಡಿದಾಗ ಮತ್ತು ಯೋವಾಬನು ಹಿಂತಿರುಗಿ ಬಂದು ಉಪ್ಪಿನ ಕಣಿವೆಯಲ್ಲಿ ಎದೋಮ್ಯರ12,000 ಮಂದಿ ಸೈನಿಕರನ್ನು ಸೋಲಿಸಿದಾಗ ರಚಿಸಲ್ಪಟ್ಟಿತು . ರಚನೆಗಾರ: ದಾವೀದ*

1 ದೇವರೇ, ನೀನು ನಮ್ಮನ್ನು ಕೋಪದಿಂದ ಕೈಬಿಟ್ಟಿರುವೆ ; ನಮ್ಮನ್ನು ನಾಶಗೊಳಿಸಿರುವೆ. ನಮ್ಮನ್ನು ಮತ್ತೆ ಪುನರ್ ಸ್ಥಾಪಿಸು.

2 ನೀನು ಭೂಮಿಯನ್ನು ನಡುಗಿಸಿ ಸೀಳಿಬಿಟ್ಟಿರುವೆ. ನಮ್ಮ ದೇಶವು ಕುಸಿದುಬೀಳುತ್ತಿದೆ; ಅದನ್ನು ಸರಿಪಡಿಸು.

3 ನೀನು ನಿನ್ನ ಜನರಿಗೆ ಅನೇಕ ಕಷ್ಟಗಳನ್ನು ಕೊಟ್ಟಿರುವೆ. ನಾವು ಕುಡಿದವರಂತೆ ತೂರಾಡುತ್ತಾ ಬೀಳುತ್ತಿದ್ದೇವೆ.

4 ನಿನ್ನ ಆರಾಧಕರನ್ನು ನೀನು ಎಚ್ಚರಿಸುವೆ. ಈಗ ಅವರು ಶತ್ರುಗಳಿಂದ ಪಾರಾಗಬಹುದು.

5 ನಿನ್ನ ಮಹಾಶಕ್ತಿಯಿಂದ ನಮ್ಮನ್ನು ರಕ್ಷಿಸು! ನನ್ನ ಪ್ರಾರ್ಥನೆ ಗೆ ಉತ್ತರನೀಡಿ ನಿನ್ನ ಪ್ರಿಯರನ್ನು ರಕ್ಷಿಸು!

6 ದೇವರು ತನ್ನ ಆಲಯದೊಳಗೆ ಇಂತೆಂದನು: ''ನಾನು ಅವರಿಗೆ ಶೆಖೆಮನ್ನು ಕೊಡುವೆನು; ಸುಕ್ಕೋತ್ ಕಣಿವೆಯನ್ನೂ ಅವರಿಗೆ ಕೊಡುವೆನು.

7 ಗಿಲ್ಯಾದ್ ಮತ್ತು ಮನಸ್ಸೆ ನನ್ನವೇ. ಎಫ್ರಾಯೀಮ್ ನನ್ನ ಶಿರಸ್ತ್ರಾಣ. ಯೆಹೂದ ನನ್ನ ರಾಜದಂಡ.

8 ಮೋವಾಬ್ ನನ್ನ ಸ್ನಾನಪಾತ್ರೆ. ಎದೋಮ್ ನನ್ನ ಪಾದರಕ್ಷೆಗಳ ಸ್ಥಳ. ನಾನು ಫಿಲಿಷ್ಟಿಯರನ್ನು ಸೋಲಿಸಿ ಜಯಘೋಷ ಮಾಡುವೆ.''

9-10 ದೇವರೇ, ನೀನು ನಮ್ಮನ್ನು ಕೈಬಿಟ್ಟಿರುವೆ. ನೀನು ನಮ್ಮ ಸೈನ್ಯಗಳ ಸಂಗಡ ಬರಲಿಲ್ಲ. ಹೀಗಿರಲು, ಕೋಟೆ ಕೊತ್ತಲುಗಳುಳ್ಳ ಪಟ್ಟಣಕ್ಕೆ ನನ್ನನ್ನು ನಡೆಸುವವರು ಯಾರು? ಎದೋಮಿನ ವಿರುದ್ಧ ನನ್ನನ್ನು ನಡೆಸುವವರು ಯಾರು?

11 ದೇವರೇ, ವೈರಿಗಳನ್ನು ಸೋಲಿಸಲು ನಮಗೆ ಸಹಾಯ ಮಾಡು! ಜನರು ನಮಗೆ ಸಹಾಯಮಾಡಲಾರರು!

12 ದೇವರೊಬ್ಬನೇ ನಮ್ಮನ್ನು ಬಲಗೊಳಿಸಬಲ್ಲನು. ಆತನೊಬ್ಬನೇ ನಮ್ಮ ಶತ್ರುಗಳನ್ನು ಸೋಲಿಸಬಲ್ಲನು!

## ಕೀರ್ತನೆ 61

*ರಚನೆಗಾರ: ದಾವೀದ*

1 ದೇವರೇ, ನನ್ನ ಮೊರೆಯನ್ನು ಕೇಳು. ನನ್ನ ಪ್ರಾರ್ಥನೆಗೆ ಕಿವಿಗೊಡು.

2 ನಾನೆಲ್ಲೇ ಇದ್ದರೂ, ಎಷ್ಟೇ ಬಲಹೀನನಾಗಿದ್ದರೂ ಸಹಾಯಕ್ಕಾಗಿ ನಿನಗೇ ಮೊರೆಯಿಡುವೆನು! ಅತ್ಯುನ್ನತ ವಾದ ಆಶ್ರಯ ಗಿರಿಗೆ ನನ್ನನ್ನು ಹತ್ತಿಸು.

3 ನೀನೇ ನನ್ನ ಆಶ್ರಯಸ್ಥಾನ; ಶತ್ರುಗಳಿಂದ ಕಾಪಾಡುವ ಭದ್ರವಾದ ಬುರುಜು.

4 ನಿನ್ನ ಗುಡಾರದಲ್ಲಿ ಸದಾಕಾಲ ವಾಸಿಸುವುದಕ್ಕೂ, ನಿನ್ನ ರೆಕ್ಕೆಗಳ ಮರೆಯನ್ನು ಆಶ್ರಯಿಸಿಕೊಳ್ಳುವುದಕ್ಕೂ ತವಕ ಪಡುತ್ತಿರುವೆ.

5 ದೇವರೇ, ನನ್ನ ಹರಕೆಗಳನ್ನೆಲ್ಲಾ ನೀನು ಕೇಳಿರುವೆ. ನಿನ್ನಲ್ಲಿ ಭಯಭಕ್ತಿಯುಳ್ಳವರಿಗೆ ಬರುವ ಸ್ವಾಸ್ಥ್ಯವನ್ನು ನೀನು ನನಗೆ ಕೊಟ್ಟಿರುವೆ.

6 ರಾಜನಿಗೆ ದೀರ್ಘಾಯುಷ್ಯವನ್ನು ದಯಪಾಲಿಸು. ಅವನು ಸದಾಕಾಲ ಜೀವಿಸಲಿ!

7 ಅವರು ದೇವರೊಂದಿಗೆ ಸದಾಕಾಲ ಜೀವಿಸಲಿ! ನಿನ್ನ ನಿಜಪ್ರೀತಿಯಿಂದ ಅವನನ್ನು ಸಂರಕ್ಷಿಸು.

8 ಆಗ ನಾನು ನಿನ್ನ ಹೆಸರನ್ನು ಸದಾಕಾಲ ಕೊಂಡಾಡುವೆನು. ನನ್ನ ಹರಕೆಗಳನ್ನು ಪ್ರತಿದಿನವೂ ಸಲ್ಲಿಸುವೆನು.

## ಕೀರ್ತನೆ 62

ರಚನೆಗಾರ: ದಾವೀದ

1 ನನ್ನ ಮನಸ್ಸು ದೇವರನ್ನೇ ನಂಬಿ ಶಾಂತವಾಗಿರುವುದು. ಆತನಿಂದಲೇ ನನಗೆ ರಕ್ಷಣೆಯಾಗುವುದು.

2 ದೇವರು ನನಗೆ ಬಂಡೆಯೂ ರಕ್ಷಣೆಯೂ ಕೋಟೆಯೂ ಆಗಿದ್ದಾನೆ. ನಾನೆಂದಿಗೂ ಕದಲೆನು.

3 ಇನ್ನೆಷ್ಟರವರೆಗೆ ನೀವು ನನ್ನ ಮೇಲೆ ಆಕ್ರಮಣ ಮಾಡು
ವಿರಿ? ನಾನು ಬಾಗಿದ ಗೋಡೆಯಂತೆಯೂ ಬೀಳಲಿ
ರುವ ಪ್ರಾಕಾರದಂತೆಯೂ ಇದ್ದೇನೆ.
4 ನನ್ನನ್ನು ಉನ್ನತಸ್ಥಾನದಿಂದ ಕೆಳಗಿಳಿಸಬೇಕೆಂದು
ಅವರು ಕುತಂತ್ರ ಮಾಡುತ್ತಿದ್ದಾರೆ. ನನ್ನ ಕುರಿತು
ಸುಳ್ಳಾಡುವುದು ಅವರಿಗೆ ಸಂತೋಷ. ಬಾಯಿಂದ
ಆಶೀರ್ವದಿಸಿ, ಹೃದಯದಲ್ಲಿ ಶಪಿಸುವರು.
5 ನನ್ನ ಮನವೇ, ದೇವರನ್ನೇ ನಂಬಿ ಶಾಂತವಾಗಿರು.
ನನ್ನ ನಿರೀಕ್ಷೆ ದೇವರಲ್ಲಿಯೇ.
6 ಆತನೇ ನನಗೆ ಬಂಡೆಯೂ ರಕ್ಷಣೆಯೂ ಆಶ್ರಯ
ದುರ್ಗವೂ ಆಗಿದ್ದಾನೆ.
7 ನನ್ನ ರಕ್ಷಣೆಯೂ ಮಾನವೂ ದೇವರೇ. ಆತನೇ ನನಗೆ
ಭದ್ರವಾದ ದುರ್ಗವೂ ಆಶ್ರಯಸ್ಥಾನವೂ ಆಗಿದ್ದಾನೆ.
8 ಜನರೇ, ಯಾವಾಗಲೂ ದೇವರನ್ನೇ ನಂಬಿಕೊಂಡಿರಿ.
ನಿಮ್ಮ ಕಷ್ಟಗಳನ್ನೆಲ್ಲಾ ಆತನಿಗೆ ಹೇಳಿಕೊಳ್ಳಿರಿ. ಆತನೇ
ನಮ್ಮ ಆಶ್ರಯಸ್ಥಾನ.
9 ಸಾಮಾನ್ಯರು ಕೇವಲ ಉಸಿರಷ್ಟೇ. ಶ್ರೇಷ್ಠರು ಕೇವಲ
ಕ್ಷಣಕಾಲವಷ್ಟೇ. ತೂಗಿನೋಡಿದರೆ ಅವರು ಕೇವಲ
ಶೂನ್ಯ; ಉಸಿರಿಗಿಂತಲೂ ಹಗುರ.
10 ಅನ್ಯಾಯದಿಂದ ಸಂಪಾದಿಸಿದ್ದರಲ್ಲಿ ನಂಬಿಕೆ ಇಡ
ಬೇಡಿ. ಕದ್ದವಸ್ತುಗಳಲ್ಲಿ ಜಂಬಪಡಬೇಡಿ. ಐಶ್ವ
ರ್ಯವು ಅಧಿಕವಾಗುತ್ತಿದ್ದರೂ ಅದರಲ್ಲಿ ಮನಸ್ಸಿಡ
ಬೇಡಿ.
11 ‘‘ಶಕ್ತಿಯು ದೇವರಿಂದಲೇ’’ ಎಂದು ದೇವರು
ನುಡಿದಿದ್ದಾನೆ.
12 ನನ್ನ ಒಡೆಯನೇ, ನೀನು ಪ್ರೀತಿಸ್ವರೂಪನಾಗಿರುವೆ.
ಪ್ರತಿಯೊಬ್ಬನಿಗೆ ಅವನವನ ಕೃತ್ಯಗಳಿಗೆ ತಕ್ಕ ಪ್ರತಿ
ಫಲವನ್ನು ಕೊಡುವವನು ನೀನೇ.

## ಕೀರ್ತನೆ 63

*ದಾವೀದನು ಯೆಹೂದದ ಅರಣ್ಯದಲ್ಲಿದ್ದಾಗ ರಚಿಸಲ್ಪಟ್ಟಿತು.*

*ರಚನೆಗಾರ: ದಾವೀದ*

1 ದೇವರೇ, ನೀನೇ ನನ್ನ ದೇವರು. ನಿನಗಾಗಿ ಕುತೂ
ಹಲದಿಂದ ಎದುರು ನೋಡುತ್ತೇನೆ. ನೀರಿಲ್ಲದೆ ಒಣ
ಗಿದ ಭೂಮಿಯಂತೆ ನನ್ನ ಆತ್ಮವು ನಿನಗಾಗಿ ಬಾಯಾ
ರಿದೆ; ನನ್ನ ದೇಹವು ನಿನಗಾಗಿ ಬಯಸಿದೆ.
2 ಹೌದು, ನಿನ್ನನ್ನು ನಿನ್ನಾಲಯದಲ್ಲಿ ನೋಡಿದ್ದೇನೆ,
ನಿನ್ನ ಶಕ್ತಿಯನ್ನೂ ಮಹಿಮೆಯನ್ನೂ ಕಂಡಿದ್ದೇನೆ.
3 ನಿನ್ನ ಪ್ರೀತಿಯು ಜೀವಕ್ಕಿಂತಲೂ ಶ್ರೇಷ್ಠ. ನನ್ನ ತುಟಿ
ಗಳು ನಿನ್ನನ್ನು ಕೊಂಡಾಡುತ್ತವೆ.
4 ಹೌದು, ನನ್ನ ಜೀವಮಾನವೆಲ್ಲಾ ನಿನ್ನನ್ನು ಕೊಂಡಾ
ಡುವೆನು. ನಿನ್ನ ಹೆಸರಿನಲ್ಲಿ ಕೈಮುಗಿದು
ಪ್ರಾರ್ಥಿಸುವೆನು.
5 ಮೃಷ್ಟಾನ್ನವನ್ನು ತಿಂದಿರುವವನಂತೆ ತೃಪ್ತನಾಗಿರು
ವೆನು. ನನ್ನ ಬಾಯಿ ನಿನ್ನನ್ನು ಕೊಂಡಾಡುವುದು.
6 ಹಾಸಿಗೆಯ ಮೇಲೆ ಮಲಗಿರುವಾಗಲೂ ನಿನ್ನನ್ನು
ಜ್ಞಾಪಿಸಿಕೊಳ್ಳುವೆನು. ಮಧ್ಯರಾತ್ರಿಯಲ್ಲಿಯೂ
ನಿನ್ನನ್ನು ನೆನಸಿಕೊಳ್ಳುವೆನು.
7 ನಿಜವಾಗಿಯೂ ನೀನೇ ನನಗೆ ಸಹಾಯಕ. ನಿನ್ನ
ರೆಕ್ಕೆಗಳ ಮರೆಯಲ್ಲಿ ಆನಂದಘೋಷಮಾಡುವೆನು.
8 ನನ್ನ ಆತ್ಮವು ನಿನ್ನನ್ನು ಅಂಟಿಕೊಂಡಿರುವುದು. ನಿನ್ನ
ಬಲಗೈ ನನ್ನ ಕೈಹಿಡಿದು ನಡೆಸುವುದು.
9 ನನ್ನನ್ನು ಕೊಲ್ಲಬೇಕೆಂದಿರುವವರು ಪಾತಾಳಕ್ಕೆ
ಇಳಿದು ಹೋಗುವರು.
10 ಅವರು ಖಡ್ಗಗಳಿಂದ ಕೊಲ್ಲಲ್ಪಡುವರು. ಅವರ
ಶವಗಳು ನರಿಗಳ ಪಾಲಾಗುವವು.
11 ರಾಜನಾದರೊ ತನ್ನ ದೇವರಲ್ಲಿಯೇ ಸಂತೋಷಿ
ಸುವನು. ಹರಕೆಹೊತ್ತು ಅವನಿಗೆ ವಿಧೇಯರಾಗಿರು
ವವರು ದೇವರನ್ನು ಕೊಂಡಾಡುವರು, ಯಾಕಂದರೆ
ಆ ಸುಳ್ಳುಗಾರರನ್ನೆಲ್ಲಾ ಆತನು ಸೋಲಿಸಿದ್ದಾನೆ.

## ಕೀರ್ತನೆ 64

*ರಚನೆಗಾರ: ದಾವೀದ*

1 ದೇವರೇ, ನನಗೆ ಕಿವಿಗೊಡು. ವೈರಿಯು ನನಗೆ
ಬೆದರಿಕೆ ಹಾಕಿದ್ದಾನೆ. ನನ್ನ ಪ್ರಾಣವನ್ನು ರಕ್ಷಿಸು.
2 ನನ್ನ ಶತ್ರುಗಳ ಒಳಸಂಚುಗಳಿಂದ ನನ್ನನ್ನು ಸಂರಕ್ಷಿಸು.
ಆ ದುಷ್ಟರಿಗೆ ಸಿಕ್ಕದಂತೆ ನನ್ನನ್ನು ಮರೆಮಾಡು.
3 ಅವರು ನನ್ನ ಬಗ್ಗೆ ಕಡುಸುಳ್ಳುಗಳನ್ನು ಹೇಳಿದ್ದಾರೆ.
ಅವರ ನಾಲಿಗೆಗಳು ಹರಿತವಾದ ಖಡ್ಗಗಳಂತಿವೆ. ಅವರ
ಮಾತುಗಳು ವಿಷಬಾಣಗಳಂತಿವೆ.
4 ಗುಪ್ತಸ್ಥಳಗಳಲ್ಲಿ ಅಡಗಿಕೊಂಡಿದ್ದು ನಿರ್ಭಯ
ದಿಂದ* ನೀತಿವಂತನ ಮೇಲೆ ಆ ಬಾಣಗಳನ್ನು
ಎಸೆಯುತ್ತಾರೆ.
5 ಕೇಡು ಮಾಡಲು ಒಬ್ಬರನ್ನೊಬ್ಬರು ಪ್ರೋತ್ಸಾಹಿಸಿ
ಬಲೆಯೊಡ್ಡಲು ಆಲೋಚಿಸುವರು. ‘‘ತಮ್ಮ ಬಲೆಗಳು
ಯಾರಿಗೂ ಕಾಣುವುದಿಲ್ಲ’’ ಎಂದು ಮಾತಾಡಿ
ಕೊಳ್ಳುವರು.
6 ಅವರು ತಮ್ಮ ಬಲೆಗಳನ್ನು ಅಡಗಿಸಿಟ್ಟಿದ್ದಾರೆ; ಬೇಟೆ
ಗಳಿಗಾಗಿ ಎದುರುನೋಡುತ್ತಿದ್ದಾರೆ. (ಜನರು
ಕುತಂತ್ರಿಗಳಾಗಿದ್ದರೆ, ಅವರ ಆಲೋಚನೆಯನ್ನು
ತಿಳಿದುಕೊಳ್ಳುವುದು ಬಹು ಕಷ್ಟ.)*
7 ಆದರೆ ದೇವರು ತನ್ನ ‘‘ಬಾಣಗಳನ್ನು’’ ಎಸೆಯಲು
ಇದ್ದಕ್ಕಿದ್ದಂತೆ ದುಷ್ಟರು ಗಾಯಗೊಳ್ಳುವರು.

---

**ನಿರ್ಭಯದಿಂದ** ಅಥವಾ ಅಗೌರವದಿಂದ.

**ಅವರು … ಬಹುಕಷ್ಟ** ಅಥವಾ, ‘‘ಅವರು ದುಷ್ಟ ಯೋಜನೆಗಳಿಗಾಗಿ ಎದುರು ನೋಡುತ್ತಾ, ನಮ್ಮಲ್ಲಿ ಸಂಪೂರ್ಣವಾದ ಯೋಜನೆಯಿದೆ’’ ಎನ್ನುತ್ತಾರೆ.

8 ದುಷ್ಟರು ಬೇರೆಯವರಿಗೆ ಕೇಡು ಮಾಡಲು
ಆಲೋಚಿಸುವರು. ಆದರೆ ಆ ಕೇಡುಗಳು ಅವರಿಗೇ
ಸಂಭವಿಸುವಂತೆ ದೇವರು ಮಾಡುವನು. ಆಗ ಅವ
ರನ್ನು ಕಂಡ ಪ್ರತಿಯೊಬ್ಬನೂ ಆಶ್ಚರ್ಯದಿಂದ ತಲೆ
ಯಾಡಿಸುವನು.
9 ದೇವರ ಕಾರ್ಯವನ್ನು ಜನರು ಕಂಡು ಅದರ ಬಗ್ಗೆ
ಬೇರೆಯವರಿಗೂ ತಿಳಿಸುವರು. ಹೀಗೆ ಪ್ರತಿ
ಯೊಬ್ಬರೂ ದೇವರ ಬಗ್ಗೆ ಹೆಚ್ಚಾಗಿ ಕಲಿತುಕೊಂಡು
ಆತನಲ್ಲಿ ಭಯ ಭಕ್ತಿಯುಳ್ಳವರಾಗುವರು.
10 ನೀತಿವಂತನು ಯೆಹೋವನಲ್ಲಿ ಸಂತೋಷಿಸುತ್ತಾ ಆತ
ನನ್ನೇ ಆಶ್ರಯಿಸಿಕೊಳ್ಳುವನು. ಯಥಾರ್ಥವಂತರು
ಯೆಹೋವನನ್ನು ಕೊಂಡಾಡುವರು.

## ಕೀರ್ತನೆ 65

*ರಚನೆಗಾರ: ದಾವೀದ*

1 ದೇವರೇ, ಚೀಯೋನಿನಲ್ಲಿ ನಾವು ನಿನ್ನನ್ನು ಸ್ತುತಿ
ಸುವೆವು. ನಾವು ಮಾಡಿದ ಹರಕೆಗಳನ್ನು ನಿನಗೆ
ಸಲ್ಲಿಸುವೆವು.
2 ಪ್ರಾರ್ಥನೆಯನ್ನು ಕೇಳುವಾತನೇ, ಜನರೆಲ್ಲರೂ ನಿನ್ನ
ಬಳಿಗೆ ಬರುವರು.
3 ನಮ್ಮ ಪಾಪಗಳು ಹೊರಲಾರದಷ್ಟು ಭಾರವಾಗಿವೆ;
ನಮ್ಮನ್ನು ಆ ಪಾಪಗಳಿಂದ ಬಿಡಿಸು.
4 ನಿನ್ನ ಸೇವಕರನ್ನು ಆರಿಸಿಕೊಂಡಾತನು ನೀನೇ. ನಿನ್ನಾ
ಲಯಕ್ಕೆ ಬಂದು ನಿನ್ನನ್ನು ಆರಾಧಿಸಲು ನಮ್ಮನ್ನು
ಆರಿಸಿಕೊಂಡಾತನು ನೀನೇ. ನಿನ್ನ ಮಹಾಪವಿತ್ರ
ಆಲಯದ ಸೌಭಾಗ್ಯದಿಂದ ನಾವು ಉಲ್ಲಾಸ
ಗೊಂಡಿದ್ದೇವೆ.
5 ನಮ್ಮ ರಕ್ಷಕನಾದ ದೇವರೇ, ನೀತಿವಂತರ ಪ್ರಾರ್ಥ
ನೆಗೆ ಸದುತ್ತರವನ್ನು ದಯಪಾಲಿಸು; ಅವರಿಗೋಸ್ಕರ
ಮಹತ್ಕಾರ್ಯಗಳನ್ನು ನಡೆಸು. ಸರ್ವಭೂನಿವಾಸಿಗಳ
ನಂಬಿಕೆಗೆ ನೀನೇ ಆಧಾರ.
6 ಸ್ವಬಲದಿಂದ ಪರ್ವತಗಳನ್ನು ನಿರ್ಮಿಸಿದಾತನು
ದೇವರೇ. ಆತನು "ಶೌರ್ಯ" ಎಂಬ ನಡುಕಟ್ಟನ್ನು
ಬಿಗಿದುಕೊಂಡಿದ್ದಾನೆ.
7 ಭೋರ್ಗರೆಯುವ ಸಮುದ್ರವನ್ನೂ ಅನ್ಯಜನಾಂಗ
ಗಳ ದಂಗೆಯನ್ನೂ ಶಾಂತಗೊಳಿಸುವಾತನು ದೇವರೇ.
8 ಭೂಲೋಕದಾದ್ಯಂತದಲ್ಲಿರುವ ಜನರು ನಿನ್ನ ಮಹ
ತ್ಕಾರ್ಯಗಳಿಂದ ಆಶ್ಚರ್ಯಚಕಿತರಾಗಿದ್ದಾರೆ.
ಸೂರ್ಯೋದಯವೂ ಸೂರ್ಯಾಸ್ತಮಾನವೂ
ನಮ್ಮನ್ನು ಹರ್ಷಗೊಳಿಸುತ್ತವೆ.
9 ದೇವರೇ, ಭೂಪಾಲಕನು ನೀನೇ. ಭೂಮಿಗೆ ನೀರೆ
ರೆದು ಹದಗೊಳಿಸುವಾತನು ನೀನೇ. ತೊರೆಗಳನ್ನು
ತುಂಬಿಸಿ ಸುಗ್ಗಿಯನ್ನು ಬರಮಾಡುವಾತನು ನೀನೇ.
10 ಉತ್ತಿರುವ ಹೊಲಗಳ ಮೇಲೆ ಮಳೆ ಸುರಿಸಿ, ಹೆಂಟೆ
ಗಳನ್ನು ಕರಗಿಸಿ, ಭೂಮಿಯನ್ನು ಮೃದುಗೊಳಿಸಿ, ಎಳೆ
ಸಸಿಗಳನ್ನು ಬೆಳೆಸುವಾತನು ನೀನೇ.
11 ಹೊಸವರ್ಷವನ್ನು ಸಮೃದ್ಧಿಕರವಾದ ಸುಗ್ಗಿಯೊಂದಿಗೆ
ಆರಂಭಿಸುವಾತನು ನೀನೇ. ಅನೇಕ ಬೆಳೆಗಳಿಂದ
ಬಂಡಿಗಳನ್ನು ತುಂಬಿಸುವಾತನು ನೀನೇ.
12 ಅರಣ್ಯವೂ ಬೆಟ್ಟಗಳೂ ಹುಲ್ಲಿನಿಂದ ಆವೃತವಾಗಿವೆ.
13 ಹುಲ್ಲುಗಾವಲುಗಳು ಕುರಿಗಳಿಂದ ತುಂಬಿಹೋಗಿವೆ.
ಕಣಿವೆಗಳು ದಾನ್ಯದಿಂದ ತುಂಬಿತುಳುಕುತ್ತಿವೆ.
ಎಲ್ಲರೂ ಹಾಡುತ್ತಾ ಆನಂದಘೋಷ
ಮಾಡುತ್ತಿದ್ದಾರೆ.

## ಕೀರ್ತನೆ 66

*ಸ್ತುತಿಗೀತೆ*

1 ಸರ್ವಭೂನಿವಾಸಿಗಳೇ, ದೇವರಿಗೆ ಜಯಘೋಷ
ಮಾಡಿರಿ!
2 ಆತನ ಹೆಸರಿನ ಮಹಿಮೆಯನ್ನು ಕೀರ್ತಿಸಿರಿ. ಸ್ತುತಿ
ಗೀತಗಳಿಂದ ಆತನನ್ನು ಸನ್ಮಾನಿಸಿರಿ.
3 ದೇವರೇ, ನಿನ್ನ ಕಾರ್ಯಗಳು ಎಷ್ಟು ಅದ್ಭುತವಾಗಿವೆ!
ನಿನ್ನ ಮಹಾಶಕ್ತಿಯಿಂದಾಗಿ ಶತ್ರುಗಳು ನಿನಗೆ ಭಯ
ಪಟ್ಟು ಅಡ್ಡಬೀಳುವರು.
4 ಇಡೀಲೋಕವೇ ನಿನ್ನನ್ನು ಆರಾಧಿಸಲಿ. ಪ್ರತಿ
ಯೊಬ್ಬರೂ ನಿನ್ನ ಹೆಸರನ್ನು ಕೀರ್ತಿಸಲಿ.
5 ಬನ್ನಿರಿ, ದೇವರ ಕಾರ್ಯಗಳನ್ನು ನೋಡಿರಿ;
ಅತ್ಯಾದ್ಭುತವಾಗಿವೆ ಆತನ ಕಾರ್ಯಗಳು!
6 ಆತನು ಸಮುದ್ರವನ್ನು ಒಣನೆಲವನ್ನಾಗಿ ಮಾಡಿದನು.
ಆತನ ಜನರು ಕಾಲುನಡಿಗೆಯಿಂದ ನದಿಯನ್ನು
ದಾಟಿದರು.

7 ದೇವರು ಪ್ರಪಂಚವನ್ನು ತನ್ನ ಮಹಾಶಕ್ತಿಯಿಂದ
ಆಳುತ್ತಾನೆ. ಆತನು ಎಲ್ಲರನ್ನೂ ಗಮನಿಸುತ್ತಾನೆ.
ಆತನ ವಿರುದ್ಧ ದಂಗೆಯೇಳಲು ಯಾರಿಗೂ ಆಗದು.
8 ಜನರೇ, ನಮ್ಮ ದೇವರನ್ನು ಕೊಂಡಾಡಿರಿ. ಆತನಿಗೆ
ಸ್ತುತಿಗೀತೆಗಳನ್ನು ಹಾಡಿರಿ.
9 ನಮಗೆ ಜೀವಕೊಟ್ಟವನು ಆತನೇ. ನಮ್ಮನ್ನು
ಕಾಪಾಡುವವನೂ ಆತನೇ.
10 ಜನರು ಬೆಳ್ಳಿಯನ್ನು ಬೆಂಕಿಯಿಂದ ಶೋಧಿಸುವಂತೆ
ದೇವರು ನಮ್ಮನ್ನು ಪರೀಕ್ಷಿಸಿದನು.
11 ದೇವರೇ, ನೀನು ನಮ್ಮನ್ನು ಬಲೆಯಲ್ಲಿ ಸಿಕ್ಕಿಸಿದೆ.
ನೀನು ನಮಗೆ ಭಾರದ ಹೊರೆಗಳನ್ನು ಹೊರಿಸಿದೆ;
12 ಶತ್ರುಗಳು ನಮ್ಮ ಮೇಲೆ ನಡೆಯಮಾಡಿದೆ. ನೀನು
ನಮ್ಮನ್ನು ಬೆಂಕಿಯಲ್ಲಿಯೂ ನೀರಿನಲ್ಲಿಯೂ

ಹಾಯಿಸಿದೆ. ಆದರೂ ಸುರಕ್ಷಿತಸ್ಥಳಕ್ಕೆ ನಮ್ಮನ್ನು
ತಂದು ಸೇರಿಸಿದೆ.
13-14 ಆದ್ದರಿಂದ ನಿನ್ನಾಲಯಕ್ಕೆ ಬಂದು ಯಜ್ಞಗಳನ್ನು
ನಿನಗೆ ಸಮರ್ಪಿಸುವೆನು. ನಾನು ಇಕ್ಕಟ್ಟಿನಲ್ಲಿದ್ದಾಗ
ಸಹಾಯಕ್ಕಾಗಿ ನಿನ್ನನ್ನು ಕೂಗಿಕೊಂಡಾಗ ಮಾಡಿದ
ಹರಕೆಗಳನ್ನು ಸಲ್ಲಿಸುವೆನು.
15 ಪಾಪಪರಿಹಾರಕ ಯಜ್ಞಗಳನ್ನು ನಿನಗೆ ಅರ್ಪಿಸುವೆನು;
ಟಗರುಗಳನ್ನೂ ಧೂಪವನ್ನೂ ಅರ್ಪಿಸುವೆನು;
ಹೋರಿಗಳನ್ನೂ ಹೋತಗಳನ್ನೂ ಅರ್ಪಿಸುವೆನು.
16 ದೇವಭಕ್ತರೆಲ್ಲರೂ, ಬನ್ನಿರಿ ದೇವರು ನನಗೋಸ್ಕರ
ಮಾಡಿರುವುದನ್ನು ನಿಮಗೆ ತಿಳಿಸುವೆನು.
17 ನಾನು ಆತನಿಗೆ ಪ್ರಾರ್ಥಿಸಿದೆನು; ಆತನನ್ನು
ಸ್ತುತಿಸಿದೆನು.
18 ನನ್ನ ಶುದ್ಧಹೃದಯವನ್ನು ಕಂಡು ಯೆಹೋವನು ಕಿವಿ
ಗೊಟ್ಟನು.
19 ದೇವರು ನನ್ನ ಮೊರೆಯನ್ನು ಕೇಳಿದನು; ನನ್ನ
ಪ್ರಾರ್ಥನೆಯನ್ನು ಆಲಿಸಿದನು.
20 ದೇವರಿಗೆ ಸ್ತೋತ್ರವಾಗಲಿ! ಆತನು ನನಗೆ ವಿಮುಖ
ನಾಗದೆ, ನನ್ನ ಪ್ರಾರ್ಥನೆಯನ್ನು ಆಲಿಸಿ, ತನ್ನ ಪ್ರೀತಿ
ತೋರಿದನು!

## ಕೀರ್ತನೆ 67

*ಸ್ತುತಿಗೀತೆ*

1 ದೇವರೇ, ನನ್ನನ್ನು ಕರುಣಿಸಿ ಆಶೀರ್ವದಿಸು. ಪ್ರಸನ್ನ
ಮುಖದಿಂದ ನಮ್ಮನ್ನು ನೋಡು.
2 ದೇವರೇ, ಸರ್ವಭೂನಿವಾಸಿಗಳು ನಿನ್ನನ್ನು ತಿಳಿದು
ಕೊಳ್ಳಲಿ. ಜನರಿಗೆ ನಿನ್ನಿಂದಾಗುವ ರಕ್ಷಣೆಯನ್ನು
ಸರ್ವಜನಾಂಗಗಳೂ ಕಾಣಲಿ.
3 ದೇವರೇ, ಜನರು ನಿನ್ನನ್ನು ಕೊಂಡಾಡಲಿ! ಜನರೆ
ಲ್ಲರೂ ನಿನ್ನನ್ನು ಸ್ತುತಿಸಲಿ!
4 ಎಲ್ಲಾ ಜನಾಂಗಗಳು ಸಂತೋಷದಿಂದ ಉಲ್ಲಾಸಿಸಲಿ.
ಯಾಕಂದರೆ ಜನರಿಗೆ ನ್ಯಾಯವಾದ ತೀರ್ಪುಮಾಡು
ವಾತನು ನೀನೇ; ಪ್ರತಿಯೊಂದು ಜನಾಂಗವನ್ನು ಆಳು
ವಾತನು ನೀನೇ.
5 ದೇವರೇ, ಜನರು ನಿನ್ನನ್ನು ಕೊಂಡಾಡಲಿ! ಜನರೆ
ಲ್ಲರೂ ನಿನ್ನನ್ನು ಸ್ತುತಿಸಲಿ!
6 ದೇವರೇ, ನಮ್ಮ ದೇವರೇ, ನಮ್ಮನ್ನು ಆಶೀರ್ವದಿಸು.
ನಮ್ಮ ಭೂಮಿಯು ಮಹಾಸುಗ್ಗಿಯನ್ನು ಕೊಡಲಿ.
7 ದೇವರು ನಮ್ಮನ್ನು ಆಶೀರ್ವದಿಸಲಿ. ಸರ್ವಭೂನಿ
ವಾಸಿ ಗಳೆಲ್ಲರೂ ಆತನಲ್ಲಿ ಭಯಭಕ್ತಿವುಳ್ಳವರಾಗಲಿ.

## ಕೀರ್ತನೆ 68

*ರಚನೆಗಾರ: ದಾವೀದ*

1 ದೇವರೇ, ಎದ್ದೇಳು! ನಿನ್ನ ವೈರಿಗಳನ್ನು ಚದರಿಸಿಬಿಡು.
ಆತನ ಶತ್ರುಗಳೆಲ್ಲಾ ಆತನಿಗೆ ಬೆಂಗೊಟ್ಟು ಓಡಿ
ಹೋಗಲಿ.
2 ಗಾಳಿ ಬಡಿದುಕೊಂಡು ಹೋಗುವ ಹೊಗೆಯಂತೆ
ನಿನ್ನ ಶತ್ರುಗಳು ಚದರಿಹೋಗಲಿ. ಬೆಂಕಿಯಲ್ಲಿ ಕರಗಿ
ಹೋಗುವ ಮೇಣದಂತೆ ನಿನ್ನ ಶತ್ರುಗಳು ನಾಶ
ವಾಗಲಿ.
3 ನೀತಿವಂತರಾದರೋ ದೇವರ ಸನ್ನಿಧಿಯಲ್ಲಿ ಹರ್ಷಿ
ಸಲಿ; ಅವರು ಉಲ್ಲಾಸಿಸುತ್ತಾ ಸಂತೋಷವಾಗಿರಲಿ!
4 ದೇವರಿಗೆ ಗಾಯನ ಮಾಡಿರಿ; ಆತನ ಹೆಸರನ್ನು
ಕೊಂಡಾಡಿರಿ. ಅರಣ್ಯದಲ್ಲಿ ರಥದ ಮೇಲೆ ಸವಾರಿ
ಮಾಡುತ್ತಾ ಬರುವಾತನಿಗೆ ಹಾದಿಯನ್ನು ಸಿದ್ಧ
ಗೊಳಿಸಿರಿ. ಆತನ ಹೆಸರು ಯಾಹು.* ಆತನ
ಹೆಸರನ್ನು ಕೊಂಡಾಡಿರಿ!
5 ದೇವರು ತನ್ನ ಪವಿತ್ರ ಆಲಯದಲ್ಲಿ, ಅನಾಥರಿಗೆ
ತಂದೆಯೂ ವಿಧವೆಯರಿಗೆ ಪಾಲಕನೂ ಆಗಿದ್ದಾನೆ.
6 ದೇವರು ಒಬ್ಬಂಟಿಗರಿಗೆ ಸಂಸಾರವನ್ನು ದಯ
ಪಾಲಿಸುವನು. ಆತನು ತನ್ನ ಜನರನ್ನು ಸೆರೆಯಿಂದ
ಬಿಡಿಸಿ ಸಂತೋಷಗೊಳಿಸುವನು. ದೇವದ್ರೋಹಿಗ
ಳಾದರೋ ಉರಿ ಬಿಸಿಲಿನ ಸೆರೆಯಲ್ಲಿ ಉಳಿಯುವರು.
7 ದೇವರೇ, ನಿನ್ನ ಜನರನ್ನು ಈಜಿಪ್ಟಿನಿಂದ ನಡೆಸಿದೆ.
ನೀನು ಅರಣ್ಯದಲ್ಲಿ ಅವರ ಮುಂದೆ ಪ್ರಯಾಣ
ಮಾಡುತ್ತಿರಲು,
8 ಭೂಮಿಯೇ ಕಂಪಿಸಿತು. ಇಸ್ರೇಲರ ದೇವಾಧಿ
ದೇವನು ಸೀನಾಯಿ ಬೆಟ್ಟಕ್ಕೆ ಬಂದಾಗ ಆಕಾಶವೇ
ಕರಗಿಹೋಯಿತು.
9 ದೇವರೇ, ನೀನು ಮಳೆ ಸುರಿಸಿ, ಒಣಗಿ ಕೃಶವಾಗಿದ್ದ,
ಭೂಮಿಯನ್ನು ಫಲವತ್ತು ಮಾಡಿದೆ.
10 ನಿನ್ನ ಜನರು ಆ ನಾಡಿನಲ್ಲಿ ನೆಲಸಿದರು. ದೇವರೇ,
ಅಲ್ಲಿಯ ಬಡಜನರಿಗೆ ನೀನು ಶ್ರೇಷ್ಠವಾದವುಗಳನ್ನೇ
ನೀಡಿದೆ.
11 ದೇವರು ಆಜ್ಞಾಪಿಸಲು ಅನೇಕರು ಈ ಸುವಾರ್ತೆ
ಯನ್ನು ಸಾರಲು ಹೋದರು:
12 “ಬಲಿಷ್ಠ ರಾಜರುಗಳ ಸೈನ್ಯಗಳು ಓಡಿಹೋಗುತ್ತಿವೆ!
ಸೈನಿಕರು ಯುದ್ಧದಿಂದ ತಂದ ಕೊಳ್ಳೆ ವಸ್ತುಗಳನ್ನು
ಮನೆಯಲ್ಲಿದ್ದ ಸ್ತ್ರೀಯರು ಹಂಚಿಕೊಳ್ಳುವರು. ಕುರಿ
ಹಟ್ಟಿಯೊಳಗೆ ಇದ್ದವರೂ ಐಶ್ವರ್ಯವನ್ನು ಪಾಲು
ಮಾಡಿಕೊಳ್ಳುವರು.
13 ಬಂಗಾರದ ಗರಿಗಳಿಂದ ಥಳಥಳಿಸುವ ಬೆಳ್ಳಿ ಹೊದಿಸಿ
ರುವ ಪಾರಿವಾಳದ ರೆಕ್ಕೆಗಳನ್ನು ಅವರು ಪಡೆದು
ಕೊಳ್ಳುವರು.”

---

**ಯಾಹು** “ಯೆಹೋವ” ಎಂಬ ಹೆಸರಿನ ಮತ್ತೊಂದು ರೂಪ.

14 ಸಲ್ಮೋನ್ ಪರ್ವತದ ಮೇಲೆ ದೇವರು ಶತ್ರು
ರಾಜರುಗಳನ್ನು ಚದರಿಸಿಬಿಟ್ಟನು. ಅವರು ಸುರಿ
ಯುತ್ತಿರುವ ಹಿಮದಂತಿದ್ದರು.
15 ಬಾಷಾನ್ ಬೆಟ್ಟವು ಅನೇಕ ಶಿಖರಗಳುಳ್ಳ ಮಹಾ
ಪರ್ವತ.
16 ಬಾಷಾನ್ ಪರ್ವತವೇ, ಚೀಯೋನ್ ಪರ್ವತವನ್ನು,
ನೀನು ಕೀಳಾಗಿ ಕಾಣುವುದೇಕೆ? ಯೆಹೋವನು
ತನಗೆ ಪ್ರಿಯವಾದ ಚೀಯೋನ್ ಪರ್ವತವನ್ನೇ ತನ್ನ
ಶಾಶ್ವತ ವಾಸ ಸ್ಥಾನವಾಗಿ ಆರಿಸಿಕೊಂಡಿದ್ದಾನೆ.
17 ಯೆಹೋವನು ಪವಿತ್ರವಾದ ಚೀಯೋನ್ ಪರ್ವತಕ್ಕೆ
ಬರುತ್ತಾನೆ. ಆತನ ಹಿಂದೆ ಆತನ ಲಕ್ಷಾಂತರ
ರಥಗಳಿವೆ.
18 ಆತನು ಸೆರೆಯಾಳುಗಳನ್ನು ನಡೆಸಿಕೊಂಡು ಬೆಟ್ಟದ
ಮೇಲೇರಿ ಹೋದನು; ತನಗೆ ದ್ರೋಹಮಾಡಿದ ಜನ
ರಿಂದ ಆತನು ಕಪ್ಪಗಳನ್ನು ತೆಗೆದುಕೊಳ್ಳುವನು. ದೇವ
ರಾದ ಯೆಹೋವನು ಮೇಲೇರಿಹೋದದ್ದು ಅಲ್ಲಿ
ವಾಸಿಸುವುದಕ್ಕಾಗಿಯೇ.
19 ನಮ್ಮ ಅನುದಿನದ ಭಾರಗಳನ್ನು ಹೊರುವ
ಯೆಹೋವನಿಗೆ ಸ್ತೋತ್ರವಾಗಲಿ! ನಮ್ಮನ್ನು
ರಕ್ಷಿಸುವವನು ಆತನೇ.
20 ಆತನೇ ನಮ್ಮ ದೇವರು. ನಮ್ಮನ್ನು ರಕ್ಷಿಸುವ ದೇವರು
ಆತನೇ. ನಮ್ಮ ದೇವರಾದ ಯೆಹೋವನು ನಮ್ಮನ್ನು
ಮರಣದಿಂದ ರಕ್ಷಿಸುವನು.
21 ದೇವರು ತನ್ನ ವೈರಿಗಳ ಶಿರಸ್ಸುಗಳನ್ನೂ ಪಾಪದಲ್ಲಿ
ಜೀವಿಸುವವರ ತಲೆಗಳನ್ನೂ ಜಜ್ಜಿಬಿಡುವನು.
22 ನನ್ನ ಯೆಹೋವನು ಇಂತೆಂದನು: ‘‘ನಾನು ಪೂರ್ವ
ದಿಕ್ಕಿನಲ್ಲಿರುವ ಬಾಷಾನಿನಿಂದಲೂ ಪಶ್ಚಿಮ* ದಿಕ್ಕಿ
ನಿಂದಲೂ ಶತ್ರುವನ್ನು ಹಿಡಿದುತರುವೆನು.
23 ಆಗ ನೀನು ಅವರ ರಕ್ತದಲ್ಲಿ ಕಾಲಾಡಿಸುವೆ. ನಿನ್ನ
ನಾಯಿಗಳು ಅವರ ರಕ್ತವನ್ನು ನೆಕ್ಕುತ್ತವೆ.’’
24 ಇಗೋ, ದೇವರು ವಿಜಯದ ಮೆರವಣಿಗೆಯನ್ನು
ನಡೆಸಿಕೊಂಡು ಹೋಗುತ್ತಿದ್ದಾನೆ. ನನ್ನ ರಾಜನಾದ
ಪರಿಶುದ್ಧ ದೇವರು ವಿಜಯದ ಮೆರವಣಿಗೆಯನ್ನು
ನಡೆಸಿಕೊಂಡು ಹೋಗುತ್ತಿದ್ದಾನೆ.
25 ಮುಂಭಾಗದಲ್ಲಿ ಗಾಯಕರೂ ಹಿಂಭಾಗದಲ್ಲಿ ವಾದ್ಯ
ಬಾರಿಸುವವರೂ ಸುತ್ತಲು ದಮ್ಮಡಿ ಬಡಿಯುವ
ಯುವತಿಯರು ಹೋಗುತ್ತಿದ್ದಾರೆ.
26 ಮಹಾಸಭೆಯಲ್ಲಿ ದೇವರಿಗೆ ಸ್ತೋತ್ರವಾಗಲಿ!
ಇಸ್ರೇಲ್ ಜನರೇ, ಯೆಹೋವನಿಗೆ ಸ್ತೋತ್ರಮಾಡಿರಿ!
27 ಅವರನ್ನು ಮುನ್ನಡೆಸಿಕೊಂಡು ಹೋಗುವವರಲ್ಲಿ
ಮೊದಲನೆಯದಾಗಿ ಬೆನ್ಯಾಮೀನನ ಚಿಕ್ಕ ಕುಲವಿದೆ;
ಅದರ ನಂತರ ಯೆಹೂದನ ಮಹಾಕುಲವಿದೆ. ಅದರ
ನಂತರ ಜೆಬುಲೋನ್ ಮತ್ತು ನಫ್ತಾಲಿ ಕುಲಗಳ
ನಾಯಕರು ಇದ್ದಾರೆ.
28 ದೇವರೇ, ನಿನ್ನ ಬಲವನ್ನು ನಮಗೆ ತೋರಿಸು! ಹಿಂದಿನ
ಕಾಲದಲ್ಲಿ ನಮಗಾಗಿ ಮಾಡಿದ ಬಲಪ್ರಯೋಗವನ್ನು
ನಮಗೆ ತೋರಿಸು.
29 ರಾಜರುಗಳು ತಮ್ಮ ಕಾಣಿಕೆಗಳನ್ನು ತೆಗೆದುಕೊಂಡು
ಜೆರುಸಲೇಮಿನ ನಿನ್ನಾಲಯಕ್ಕೆ ಬರುವರು.
30 ಕೋಲಿನಿಂದ ಬಡಿದು ನಿನಗೆ ಬೇಕಾದದ್ದನ್ನೆಲ್ಲಾ ಆ
ಪ್ರಾಣಿಗಳಿಂದ ಮಾಡಿಸು. ಆ ಜನಾಂಗಗಳಲ್ಲಿರುವ
‘‘ಹೋರಿಗಳು’’ ಮತ್ತು ‘‘ಹಸುಗಳು’’ ನಿನಗೆ ವಿಧೇ
ಯವಾಗಿರುವಂತೆ ಮಾಡು. ನೀನು ಆ ಜನಾಂಗ
ಗಳನ್ನು ಯುದ್ಧದಲ್ಲಿ ಸೋಲಿಸಿರುವುದರಿಂದ ಅವರು
ನಿನಗೆ ಬೆಳ್ಳಿಯನ್ನು ತಂದು ಕೊಡುವಂತೆ ಮಾಡು.
31 ಅವರು ಈಜಿಪ್ಟಿನಿಂದ ಐಶ್ವರ್ಯವನ್ನು ನಿನಗೆ ತಂದು
ಕೊಡುವಂತೆ ಮಾಡು. ದೇವರೇ ಇಥಿಯೋಪಿಯ
ದವರು ತಮ್ಮ ಐಶ್ವರ್ಯವನ್ನು ನಿನಗೆ ತಂದುಕೊಡು
ವಂತೆ ಮಾಡು.
32 ಭೂರಾಜರುಗಳೇ, ದೇವರಿಗೆ ಗಾಯನ ಮಾಡಿರಿ!
ನಮ್ಮ ಯೆಹೋವನಿಗೆ ಸ್ತುತಿಗೀತೆಗಳನ್ನು ಹಾಡಿರಿ!
33 ದೇವರಿಗೆ ಗಾಯನ ಮಾಡಿರಿ! ಆತನು ಮಹೋನ್ನತ
ವಾದ ಆಕಾಶದಲ್ಲಿ ರಥಾಶ್ವರೂಢನಾಗಿ ಸವಾರಿ
ಮಾಡುವನು. ಆತನ ಗರ್ಜನೆಗೆ ಕಿವಿಗೊಡಿರಿ!
34 ದೇವರ ಬಲವನ್ನು ಕೊಂಡಾಡಿರಿ. ಆತನ ಗಾಂಭೀ
ರ್ಯವು ಇಸ್ರೇಲಿನ ಮೇಲಿದೆ. ಆತನ ಶಕ್ತಿಯು
ಆಕಾಶಗಳಲ್ಲಿ ವ್ಯಾಪಿಸಿದೆ.
35 ದೇವರೇ, ನಿನ್ನ ಪರಿಶುದ್ಧಾಲಯದಲ್ಲಿರುವ ನೀನು
ಅದ್ಭುತ ಸ್ವರೂಪನಾಗಿರುವೆ. ಇಸ್ರೇಲರ ದೇವರು ತನ್ನ
ಜನರಿಗೆ ಬಲವನ್ನೂ ಶಕ್ತಿಯನ್ನೂ ದಯಪಾಲಿಸುವ.
ದೇವರಿಗೆ ಸ್ತೋತ್ರ!

## ಕೀರ್ತನೆ 69

*ರಚನೆಗಾರ: ದಾವೀದ*

1 ದೇವರೇ, ನನ್ನನ್ನು ರಕ್ಷಿಸು! ನನ್ನ ಬಾಯವರೆಗೂ
ನೀರು ಏರಿಬಂದಿದೆ.
2 ನಿಂತುಕೊಳ್ಳಲು ನೆಲೆ ಸಿಕ್ಕುತ್ತಿಲ್ಲ; ಆಳವಾದ ಕಳ್ಳುಸುಬಿ
ನಲ್ಲಿ ಮುಳುಗಿಹೋಗುತ್ತಿದ್ದೇನೆ. ನಾನು ಆಳವಾದ
ನೀರಿನಲ್ಲಿದ್ದೇನೆ. ಅಲೆಗಳು ನನ್ನ ಸುತ್ತಲೂ ಬಡಿ
ಯುತ್ತಿವೆ. ನಾನು ಮುಳುಗಿಹೋಗುತ್ತಿರುವೆ.
3 ಸಹಾಯಕ್ಕಾಗಿ ಕೂಗಿಕೂಗಿ ಬಲಹೀನನಾಗಿರುವೆ.
ನನ್ನ ಗಂಟಲು ನೋಯುತ್ತಿದೆ. ನಿನ್ನ ಸಹಾಯಕ್ಕಾಗಿ
ಎದುರು ನೋಡುತ್ತಾ ನನ್ನ ಕಣ್ಣುಗಳು
ನೋಯುತ್ತಿವೆ.
4 ಶತ್ರುಗಳು ನನ್ನ ತಲೆಕೂದಲುಗಳಿಗಿಂತ ಹೆಚ್ಚಾ
ಗಿದ್ದಾರೆ. ಆವರು ನಿಷ್ಕಾರಣವಾಗಿ ನನ್ನನ್ನು

---

**ಪಶ್ಚಿಮ** ಅಕ್ಷರಶಃ, ‘ಸಮುದ್ರ.’

ದ್ವೇಷಿಸುತ್ತಾರೆ; ನನ್ನನ್ನು ನಾಶಮಾಡಲು ಬಹು ಪ್ರಯತ್ನ ಮಾಡುತ್ತಿದ್ದಾರೆ. ನನ್ನ ಶತ್ರುಗಳು ನನ್ನ ಬಗ್ಗೆ ಸುಳ್ಳು ಹೇಳುವರು. ನಾನು ಕದ್ದಿಲ್ಲದಿದ್ದರೂ ಸುಳ್ಳು ಅಪವಾದ ಹೊರಿಸಿ ನನ್ನಿಂದ ದಂಡ ವಸೂಲಿ ಮಾಡಿದರು.

5 ದೇವರೇ, ನಾನೇನೂ ತಪ್ಪುಮಾಡಿಲ್ಲವೆಂದು ನಿನಗೆ ಗೊತ್ತಿದೆ. ನನ್ನ ಪಾಪಗಳನ್ನು ನಿನಗೆ ಮರೆಮಾಡಲು ನನ್ನಿಂದಾಗದು.

6 ನನ್ನ ಯೆಹೋವನೇ, ಸರ್ವಶಕ್ತನಾದ ಯೆಹೋವನೇ, ನಿನ್ನ ಹಿಂಬಾಲಕರಿಗೆ ನನ್ನಿಂದ ನಾಚಿಕೆಯಾಗದಿರಲಿ. ಇಸ್ರೇಲರ ದೇವರೇ, ನಿನ್ನ ಆರಾಧಕರಿಗೆ ನನ್ನಿಂದ ಅವಮಾನವಾಗದಿರಲಿ.

7 ನಾಚಿಕೆಯು ನನ್ನ ಮುಖವನ್ನು ಕವಿದಿದೆ. ನಿನ ಗೋಸ್ಕರವಾಗಿ ಈ ನಾಚಿಕೆಯನ್ನು ಹೊತ್ತು ಕೊಂಡಿದ್ದೇನೆ.

8 ನನ್ನ ಸಹೋದರರು ನನ್ನನ್ನು ಅಪರಿಚಿತನಂತೆ ಕಾಣು ತ್ತಾರೆ. ನನ್ನ ತಾಯಿಯ ಪುತ್ರರು ನನ್ನನ್ನು ಪರಕೀಯ ನಂತೆ ಕಾಣುತ್ತಾರೆ.

9 ನಿನ್ನ ಆಲಯಾಭಿಮಾನವು ನನ್ನನ್ನು ದಹಿಸುತ್ತಿದೆ. ನಿನ್ನನ್ನು ಗೇಲಿ ಮಾಡುವ ಜನರಿಂದ ನನಗೆ ಅವಮಾನ ವಾಗುತ್ತಿದೆ.

10 ನಾನು ಅಳುತ್ತಾ ಉಪವಾಸಮಾಡುವೆನು. ಅವರು ಅದಕ್ಕೂ ನನ್ನನ್ನು ಗೇಲಿಮಾಡುವರು.

11 ನಾನು ಶೋಕವಸ್ತ್ರವನ್ನು ಧರಿಸಿಕೊಂಡದ್ದು ಗಾದೆಯ ಮಾತಾಯಿತು.

12 ಅವರು ನನ್ನ ಬಗ್ಗೆ ಬಹಿರಂಗ ಸ್ಥಳಗಳಲ್ಲಿ ಮಾತಾಡು ವರು. ಕುಡುಕರು ನನ್ನ ವಿಷಯದಲ್ಲಿ ಹಾಡನ್ನು ರಚಿಸುವರು.

13 ಯೆಹೋವನೇ, ನಾನಾದರೋ, ನಿನಗೆ ಮೊರೆಯಿಟ್ಟಿ ದ್ದೇನೆ: ನಿನ್ನ ಕೃಪೆಗೆ ತಕ್ಕ ಕಾಲ ಇದೇ. ದೇವರೇ, ನಿನ್ನ ಮಹಾ ಪ್ರೀತಿಯಿಂದಲೂ ನಿಶ್ಚಿತವಾದ ರಕ್ಷಣೆ ಯಿಂದಲೂ ನನಗೆ ಉತ್ತರಿಸು.

14 ನನ್ನನ್ನು ಕಳ್ಳುಸುಬಿನಿಂದ ಮೇಲೆತ್ತು; ಮುಳುಗಿ ಹೋಗಲು ಬಿಡಬೇಡ. ನನ್ನನ್ನು ದ್ವೇಷಿಸುವ ಜನ ರಿಂದ ನನ್ನನ್ನು ರಕ್ಷಿಸು. ಈ ಆಳವಾದ ನೀರಿನಿಂದ ನನ್ನನ್ನು ರಕ್ಷಿಸು.

15 ಅಲೆಗಳು ನನ್ನನ್ನು ಮುಳುಗಿಸಲು ಬಿಡಬೇಡ. ಆಳ ವಾದ ಹಳ್ಳವು ನನ್ನನ್ನು ಎಳೆದುಕೊಳ್ಳಲು ಬಿಡಬೇಡ. ಸಮಾಧಿಯು ನನ್ನನ್ನು ನುಂಗಲು ಬಿಡಬೇಡ.

16 ಯೆಹೋವನೇ, ನಿನ್ನ ಪ್ರೀತಿ ಎಷ್ಟೋ ಒಳ್ಳೆಯದು. ನಿನ್ನ ಪೂರ್ಣಪ್ರೀತಿಯಿಂದ ನನಗೆ ಉತ್ತರಿಸು. ನಿನ್ನ ಪೂರ್ಣ ಕರುಣೆಯಿಂದ ನನ್ನ ಕಡೆಗೆ ತಿರುಗಿ ಸಹಾಯ ಮಾಡು.

17 ನಿನ್ನ ಸೇವಕನಿಗೆ ವಿಮುಖನಾಗಬೇಡ. ನಾನು ಆಪತ್ತಿ ನಲ್ಲಿದ್ದೇನೆ! ಬೇಗನೆ ನನಗೆ ಸಹಾಯಮಾಡು!

18 ಬಂದು ನನ್ನ ಪ್ರಾಣವನ್ನು ರಕ್ಷಿಸು. ನನ್ನ ಶತ್ರುಗಳಿಂದ ನನ್ನನ್ನು ವಿಮೋಚಿಸು.

19 ನನ್ನ ನಾಚಿಕೆ ನಿನಗೆ ಗೊತ್ತಿದೆ. ಶತ್ರುಗಳು ನನಗೆ ಮಾಡಿದ ಅವಮಾನ ನಿನಗೆ ಗೊತ್ತಿದೆ. ಅವರು ಮಾಡಿ ದ್ದನ್ನೆಲ್ಲಾ ನೀನು ಕಣ್ಣಾರೆ ನೋಡಿರುವೆ.

20 ನಾಚಿಕೆಯು ನನ್ನನ್ನು ಜಜ್ಜಿಹಾಕಿದೆ! ನಾನು ನಾಚಿಕೆ ಯಿಂದ ಸಾಯುವಂತಿದ್ದೇನೆ. ಕರುಣಾಳುಗಳನ್ನು ನಿರೀಕ್ಷಿಸಿದೆ, ಆದರೆ ಯಾರೂ ದೊರೆಯಲಿಲ್ಲ. ಸಂತೈ ಸುವವರನ್ನು ಹಾರೈಸಿದೆ, ಆದರೆ ಯಾರೂ ಸಿಗಲಿಲ್ಲ.

21 ಅವರು ನನಗೆ ಕೊಟ್ಟದ್ದು ವಿಷ, ಆಹಾರವಲ್ಲ. ಅವರು ನನಗೆ ಕೊಟ್ಟದ್ದು ಹುಳಿರಸ, ದ್ರಾಕ್ಷಾರಸವಲ್ಲ.

22 ಅವರ ಮೇಜಿನ ಮೇಲಿರುವ ಆಹಾರ, ಪಾನೀಯಗಳು ಅವರಿಗೆ ವಿಷವಾಗಲಿ.

23 ಅವರು ಕುರುಡರಾಗಲಿ; ಅವರ ಬೆನ್ನುಗಳು ಗೂನಾಗಲಿ.

24 ನಿನ್ನ ಕೋಪವನ್ನೆಲ್ಲಾ ಅವರು ಅನುಭವಿಸಲಿ.

25 ಅವರ ಮನೆಗಳು ಬರಿದಾಗಲಿ; ಅವುಗಳಲ್ಲಿ ಯಾರೂ ವಾಸಿಸದಂತಾಗಲಿ.

26 ಅವರನ್ನು ದಂಡಿಸು. ಆಗ ಅವರು ಓಡಿಹೋಗುವರು. ಅಲ್ಲದೆ ಅವರಿಗಾದ ನೋವುಗಳು, ಗಾಯಗಳು ಅವರ ಆಡಿಕೆಗೆ ಕಾರಣವಾಗುವವು.

27 ಅವರ ದುಷ್ಕೃತ್ಯಗಳಿಗಾಗಿ ಅವರನ್ನು ದಂಡಿಸು. ನಿನ್ನ ರಕ್ಷಣೆಯಲ್ಲಿ ಅವರಿಗೆ ಪಾಲುಕೊಡಬೇಡ.

28 ಜೀವಬಾಧ್ಯರ ಪುಸ್ತಕದಿಂದ ಅವರ ಹೆಸರುಗಳನ್ನು ಅಳಿಸಿಬಿಡು. ನೀತಿವಂತರ ಹೆಸರುಗಳೊಂದಿಗೆ ಅವರ ಹೆಸರುಗಳನ್ನು ಜೀವಬಾಧ್ಯರ ಪುಸ್ತಕದಲ್ಲಿ ಬರೆಯ ಬೇಡ.

29 ನಾನು ನೋವಿನಿಂದ ದುಃಖಗೊಂಡಿರುವೆ. ದೇವರೇ, ನನ್ನನ್ನು ಮೇಲೆತ್ತಿ ರಕ್ಷಿಸು!

30 ನಾನು ದೇವರ ಹೆಸರನ್ನು ಹಾಡಿ ಕೊಂಡಾಡುವೆನು; ಕೃತಜ್ಞತಾ ಗೀತೆಯೊಂದಿಗೆ ಆತನನ್ನು ಸ್ತುತಿಸುವೆನು.

31 ಇದು ಯೆಹೋವನಿಗೆ ಹೋರಿಗಳ ಸರ್ವಾಂಗ ಹೋಮಕ್ಕಿಂತಲೂ ಬಹು ಪ್ರಿಯವಾದದ್ದು.

32 ದೇವರನ್ನು ಆರಾಧಿಸಲು ಬಂದ ಬಡವರೇ , ಇದನ್ನು ಕೇಳಿ ಹರ್ಷಿಸಿರಿ.

33 ಯೆಹೋವನು ಬಡವರಿಗೂ ನಿಸ್ಸಹಾಯಕರಿಗೂ ಕಿವಿ ಗೊಡುತ್ತಾನೆ. ಸೆರೆಯಲ್ಲಿರುವ ತನ್ನ ಜನರನ್ನು ಸಹ ಕಡೆಗಣಿಸುವುದಿಲ್ಲ.

34 ಭೂಮ್ಯಾಕಾಶಗಳೇ, ಸಮುದ್ರವೇ, ಸಮುದ್ರ ದಲ್ಲಿರುವ ಸಮಸ್ತವೇ, ಯೆಹೋವನನ್ನು ಸ್ತುತಿಸಿರಿ!

35 ಯೆಹೋವನು ಚೀಯೋನನ್ನು ರಕ್ಷಿಸುವನು! ಆತನು ಯೆಹೂದದ ಪಟ್ಟಣಗಳನ್ನು ಮತ್ತೆ ಕಟ್ಟುವನು. ಆತನ ಜನರು ಅಲ್ಲಿ ವಾಸವಾಗಿದ್ದು ಸ್ವದೇಶವಾಗಿ ಮಾಡಿಕೊಳ್ಳುವರು!
36 ಆತನ ಸೇವಕರ ಸಂತತಿಗಳವರು ಆ ದೇಶವನ್ನು ಪಡೆದುಕೊಳ್ಳುವರು. ಆತನ ಹೆಸರನ್ನು ಪ್ರೀತಿಸುವ ಜನರು ಅಲ್ಲಿ ವಾಸಿಸುವರು.

## ಕೀರ್ತನೆ 70

*ಜ್ಞಾಪಕಾರ್ಥ ನೈವೇದ್ಯ ಸಮರ್ಪಣೆಯ ಹಾಡು.*

*ರಚನೆಗಾರ: ದಾವೀದ*

1 ದೇವರೇ, ನನ್ನನ್ನು ರಕ್ಷಿಸು! ದೇವರೇ, ಬೇಗನೆ ನನಗೆ ಸಹಾಯಮಾಡು!
2 ನನ್ನನ್ನು ಕೊಲ್ಲಲು ಪ್ರಯತ್ನಿಸುವವರು ನಿರಾಶೆಗೊಂಡು ಅಪಮಾನ ಹೊಂದಲಿ. ನನಗೆ ಕೇಡು ಮಾಡಬೇಕೆಂದಿರುವವರು ಅವಮಾನಗೊಂಡು ಓಡಿಹೋಗಲಿ.
3 ನನ್ನನ್ನು ಗೇಲಿಮಾಡುವವರು ಸೋಲಿನಿಂದ ಅವಮಾನಕ್ಕೀಡಾಗಲಿ.
4 ನಿನ್ನ ಆರಾಧಕರೆಲ್ಲರೂ ನಿನ್ನಲ್ಲಿ ಉಲ್ಲಾಸದಿಂದ ಸಂತೋಷಿಸಲಿ. ನಿನ್ನ ರಕ್ಷಣೆಯಲ್ಲಿ ಆನಂದಿಸುವವರು ನಿನ್ನನ್ನು ಯಾವಾಗಲೂ ಕೊಂಡಾಡಲಿ.
5 ನಾನಾದರೋ ಬಡವನೂ ನಿಸ್ಸಹಾಯಕನೂ ಆಗಿರುವೆ! ದೇವರೇ, ಬೇಗನೆ, ಬಂದು ನನ್ನನ್ನು ರಕ್ಷಿಸು! ಯೆಹೋವನೇ, ನನ್ನನ್ನು ಬಿಡುಗಡೆ ಮಾಡಬಲ್ಲವನು ನೀನೊಬ್ಬನೇ. ಯೆಹೋವನೇ ತಡಮಾಡಬೇಡ!

## ಕೀರ್ತನೆ 71

1 ಯೆಹೋವನೇ, ನಿನ್ನನ್ನೇ ಆಶ್ರಯಿಸಿಕೊಂಡಿದ್ದೇನೆ; ಎಂದಿಗೂ ಆಶಾಭಂಗಪಡಿಸಬೇಡ.
2 ನೀನು ನೀತಿವಂತನಾಗಿರುವುದರಿಂದ ನನ್ನನ್ನು ರಕ್ಷಿಸುವೆ; ಬಿಡುಗಡೆಮಾಡುವೆ. ನನಗೆ ಕಿವಿಗೊಟ್ಟು ನನ್ನನ್ನು ರಕ್ಷಿಸು.
3 ನೀನೇ ನನ್ನ ಸಂರಕ್ಷಣೆಯ ಆಶ್ರಯಗಿರಿಯಾಗಿರು. ನನ್ನನ್ನು ರಕ್ಷಿಸಲು ಆಜ್ಞಾಪಿಸು. ನೀನೇ ನನ್ನ ಬಂಡೆಯೂ ಕೋಟೆಯೂ ಆಗಿರುವೆ.
4 ನನ್ನ ದೇವರೇ, ದುಷ್ಟರಿಂದಲೂ ಕ್ರೂರವಾದ ಕೆಟ್ಟವರಿಂದಲೂ ನನ್ನನ್ನು ರಕ್ಷಿಸು.
5 ನನ್ನ ಒಡೆಯನೇ, ನನ್ನ ಬಾಲ್ಯದಿಂದಲೂ ನೀನೇ ನನ್ನ ನಿರೀಕ್ಷೆಯೂ ಭರವಸವೂ ಆಗಿರುವೆ.
6 ನಾನು ಹುಟ್ಟಿದಂದಿನಿಂದಲೂ ನಿನ್ನನ್ನೇ ಆಶ್ರಯಿಸಿಕೊಂಡಿದ್ದೇನೆ. ನಾನು ಜನಿಸಿದಂದಿನಿಂದಲೂ ನೀನೇ ನನಗೆ ಆಧಾರವಾಗಿರುವೆ. ನಾನು ನಿನ್ನನ್ನು ಕೊಂಡಾಡುತ್ತಲೇ ಇರುವೆನು.
7 ನಾನು ಅನೇಕರಿಗೆ ಮಾದರಿಯಾಗಿದ್ದೇನೆ. ಯಾಕಂದರೆ ನೀನೇ ನನ್ನ ಶಕ್ತಿಗೆ ಆಧಾರ.
8 ದಿನವೆಲ್ಲಾ ನಿನ್ನ ಅದ್ಭುತಕಾರ್ಯಗಳ ಬಗ್ಗೆ ನಿನ್ನನ್ನು ಸ್ತುತಿಸಿಕೊಂಡಾಡುವೆನು.
9 ವೃದ್ಧಾಪ್ಯದಲ್ಲಿ ನನ್ನನ್ನು ತಳ್ಳಿಬಿಡಬೇಡ. ಬಲವು ಕುಂದಿಹೋಗುತ್ತಿರುವಾಗ ಕೈಬಿಡಬೇಡ.
10 ನನ್ನ ಶತ್ರುಗಳು ಒಟ್ಟುಗೂಡಿ ನನ್ನನ್ನು ಕೊಲ್ಲಲು ಆಲೋಚಿಸಿಕೊಂಡಿದ್ದಾರೆ.
11 ‘‘ದೇವರು ಅವನನ್ನು ಕೈಬಿಟ್ಟಿದ್ದಾನೆ; ಬೆನ್ನಟ್ಟಿ ಅವನನ್ನು ಹಿಡಿಯಿರಿ; ಅವನಿಗೆ ಸಹಾಯಕರೇ ಇಲ್ಲ’’ ಎಂದು ಅವರು ಹೇಳಿಕೊಳ್ಳುತ್ತಿದ್ದಾರೆ.
12 ದೇವರೇ, ನನಗೆ ದೂರವಾಗಿರಬೇಡ. ನನ್ನ ದೇವರೇ, ಬೇಗನೇ ನನ್ನನ್ನು ರಕ್ಷಿಸು!
13 ನನ್ನ ಶತ್ರುಗಳನ್ನು ಸೋಲಿಸಿ ಸಂಪೂರ್ಣವಾಗಿ ನಾಶಮಾಡು! ನನಗೆ ಕೇಡುಮಾಡಬೇಕೆಂದಿರುವ ಅವರಿಗೆ ನಾಚಿಕೆಯೂ ಅವಮಾನವೂ ಆವರಿಸಿಕೊಳ್ಳಲಿ.
14 ನಾನಂತೂ ನಿನ್ನಲ್ಲೇ ಭರವಸವಿಟ್ಟಿರುವೆ. ನಿನ್ನನು ಹೆಚ್ಚೆಚ್ಚಾಗಿ ಕೊಂಡಾಡುತ್ತಿರುವೆ.
15 ನಿನ್ನ ಒಳ್ಳೆಯತನವನ್ನೂ ರಕ್ಷಣೆಯನ್ನೂ ನಾನು ಹಗಲೆಲ್ಲಾ ಹೇಳುತ್ತಲೇ ಇರುವೆನು. ಅವು ವರ್ಣಿಸಲಸಾಧ್ಯವಾಗಿವೆ.
16 ನನ್ನ ಒಡೆಯನಾದ ಯೆಹೋವನೇ, ನಿನ್ನ ಘನತೆಯ ಕುರಿತು ಹೇಳುತ್ತಲೇ ಇರುವೆನು. ನಿನ್ನೊಬ್ಬನ ಒಳ್ಳೆಯತನವನ್ನು ಕುರಿತು ಮಾತಾಡುತ್ತಲೇ ಇರುವೆನು.
17 ದೇವರೇ, ಬಾಲ್ಯದಿಂದಲೂ ನೀನೇ ನನಗೆ ಉಪದೇಶಕನಾಗಿರುವೆ. ನಿನ್ನ ಅದ್ಭುತಕಾರ್ಯಗಳ ಕುರಿತು ಇಂದಿನ ವರೆಗೂ ಪ್ರಚುರಪಡಿಸುತ್ತಿದ್ದೇನೆ.
18 ನಾನು ವೃದ್ಧನಾಗಿರುವೆ; ನನ್ನ ಕೂದಲೂ ನರೆತುಹೋಗಿದೆ. ನನ್ನ ದೇವರೇ, ನನ್ನನ್ನು ಕೈಬಿಡಬೇಡ. ನಿನ್ನ ಬಲವನ್ನೂ ಪ್ರತಾಪವನ್ನೂ ಮುಂದಿನ ತಲೆಮಾರುಗಳವರಿಗೆಲ್ಲಾ ಪ್ರಕಟಿಸುವೆನು.
19 ದೇವರೇ, ನಿನ್ನ ನೀತಿಯು ಆಕಾಶಕ್ಕಿಂತಲೂ ಉನ್ನತವಾಗಿದೆ. ನೀನು ಅದ್ಭುತಕಾರ್ಯಗಳನ್ನು ಮಾಡಿರುವೆ. ದೇವರೇ, ನಿನ್ನಂಥ ದೇವರು ಬೇರೆಲ್ಲೂ ಇಲ್ಲ.
20 ನನ್ನನ್ನು ಅನೇಕ ಕಷ್ಟಹಿಂಸೆಗಳಿಗೆ ಗುರಿಮಾಡಿದಾತನು ನೀನೇ. ಆದರೆ ಅವೆಲ್ಲವುಗಳಿಂದ ನೀನು ನನ್ನನ್ನು ರಕ್ಷಿಸಿ ಜೀವಂತವಾಗಿ ಉಳಿಸಿದೆ. ಆಪತ್ತುಗಳಿಂದ ನಾನೆಷ್ಟೇ ಮುಳುಗಿಹೋಗಿದ್ದರೂ ಮೇಲೆತ್ತಿದಾತನು ನೀನೇ.
21 ನೀನು ನನ್ನ ಘನತೆಯನ್ನು ಮೊದಲಿಗಿಂತಲೂ ಹೆಚ್ಚಿಸುವೆ. ನೀನೇ ನನ್ನನ್ನು ಸಂತೈಸುವೆ.
22 ನಾನು ಹಾರ್ಪ್‌ವಾದ್ಯವನ್ನು ನುಡಿಸುತ್ತಾ ನಿನ್ನನ್ನು ಕೊಂಡಾಡುವೆನು. ನನ್ನ ದೇವರೇ, ನಿನ್ನ

ನಂಬಿಗಸ್ತಿಕೆಯನ್ನು ಕೊಂಡಾಡುವೆನು. ಇಸ್ರೇಲಿನ
ಪರಿಶುದ್ಧನೇ, ಲೈರ್ ವಾದ್ಯವನ್ನು ನುಡಿಸುತ್ತಾ ನಿನ್ನನ್ನು
ಭಜಿಸುವೆನು.
23 ನೀನು ನನ್ನನ್ನು ರಕ್ಷಿಸಿದ್ದರಿಂದ ನನ್ನ ಪ್ರಾಣವು
ಉಲ್ಲಾಸಗೊಂಡಿದೆ. ನನ್ನ ತುಟಿಗಳಿಂದ ನಿನ್ನನ್ನು ಹಾಡಿ
ಕೊಂಡಾಡುವೆನು.
24 ನನ್ನ ನಾಲಿಗೆಯು ನಿನ್ನ ಒಳ್ಳೆಯತನದ ಬಗ್ಗೆ ಹಾಡು
ತ್ತಲೇ ಇರುವುದು. ನನ್ನನ್ನು ಕೊಲ್ಲಬೇಕೆಂದಿರು
ವವರು ಸೋತು ಹೋಗಿ ಅವಮಾನಕ್ಕೀಡಾಗುವರು.

## ಕೀರ್ತನೆ 72

*ರಚನೆಗಾರ: ಸೊಲೊಮೋನ*

1 ದೇವರೇ, ನಿನ್ನಂತೆ ನ್ಯಾಯವಾಗಿ ತೀರ್ಪುನೀಡಲು
ರಾಜನಿಗೆ ಕಲಿಸಿಕೊಡು. ನಿನ್ನ ನೀತಿಯನ್ನು ಕಲಿತು
ಕೊಳ್ಳಲು ರಾಜಕುಮಾರನಿಗೆ ಸಹಾಯಮಾಡು.
2 ನಿನ್ನ ಜನರಿಗೆ ನೀತಿಯಿಂದಲೂ ನಿನ್ನ ಬಡಜನರಿಗೆ
ನ್ಯಾಯವಾಗಿ ತೀರ್ಪು ಮಾಡಲು ಅವನಿಗೆ ಸಹಾಯ
ಮಾಡು.
3 ದೇಶದಲ್ಲೆಲ್ಲಾ ಶಾಂತಿಯೂ ನ್ಯಾಯವೂ ನೆಲೆಸಿರಲಿ.
4 ರಾಜನು ಬಡವರಿಗೆ ನ್ಯಾಯ ದೊರಕಿಸಿಕೊಡಲಿ;
ನಿಸ್ಸಹಾಯಕರಿಗೆ ಸಹಾಯಮಾಡಲಿ. ಅವರಿಗೆ ಕೇಡು
ಮಾಡುವವರನ್ನು ರಾಜನು ದಂಡಿಸಲಿ.
5 ಸೂರ್ಯಚಂದ್ರರು ಆಕಾಶದಲ್ಲಿ ಇರುವವರೆಗೂ
ಜನರು ರಾಜನಿಗೆ ಭಯಪಡಲಿ; ಅವನನ್ನು
ಗೌರವಿಸಲಿ.
6 ಹುಲ್ಲುಗಾವಲಿನ ಮೇಲೆ ಸುರಿಯುವ ಮಳೆ
ಯಂತೆಯೂ ಭೂಮಿಯನ್ನು ಹದಗೊಳಿಸುವ ಹಿತ
ವಾದ ಮಳೆಯಂತೆಯೂ ನೀನು ಅವನಿಗೆ ಸಹಾಯಕ
ನಾಗಿರು.
7 ಅವನ ಆಡಳಿತದ ದಿನಗಳಲ್ಲಿ ನೀತಿಯು ವೃದ್ಧಿ
ಯಾಗಲಿ. ಚಂದ್ರನಿರುವವರೆಗೂ ಶಾಂತಿ ನೆಲಸಿರಲಿ.
8 ಅವನ ರಾಜ್ಯವು ಸಮುದ್ರದಿಂದ ಸಮುದ್ರದವರೆಗೂ
(ಯೂಫ್ರೇಟೀಸ್) ನದಿಯಿಂದ ಭೂಮಿಯ ಬಹು
ದೂರದ ಸ್ಥಳದವರೆಗೂ ಬೆಳೆಯಲಿ.
9 ಅರಣ್ಯದಲ್ಲಿ ವಾಸಿಸುತ್ತಿರುವ ಜನರು ಅವನಿಗೆ ಅಡ್ಡ
ಬೀಳಲಿ. ಅವನ ವೈರಿಗಳೆಲ್ಲ ಅವನ ಮುಂದೆ ಬಿದ್ದು
ಮಣ್ಣುಮುಕ್ಕಲಿ.
10 ತಾರ್ಷೀಷ್‌ನ ರಾಜರುಗಳೂ ಬಹುದೂರದ ದೇಶಗ
ಳವರೂ ಅವನಿಗೆ ಉಡುಗೊರೆಗಳನ್ನು ಕೊಡಲಿ.
ಶೆಬಾ ಮತ್ತು ಸೆಬಾ ಪ್ರಾಂತ್ಯಗಳ ರಾಜರುಗಳು
ಅವನಿಗೆ ಕಪ್ಪಗಳನ್ನು ಸಲ್ಲಿಸಲಿ.
11 ಅರಸರುಗಳೆಲ್ಲಾ ನಮ್ಮ ರಾಜನಿಗೆ ಅಡ್ಡಬೀಳಲಿ.
ಜನಾಂಗಗಳೆಲ್ಲಾ ಅವನ ಸೇವೆಮಾಡಲಿ.
12 ನಮ್ಮ ರಾಜನು ನಿಸ್ಸಹಾಯಕರಿಗೆ ಸಹಾಯ
ಮಾಡುವನು. ನಮ್ಮ ರಾಜನು ಬಡವರಿಗೂ ಅಸಹಾ
ಯಕರಿಗೂ ಸಹಾಯ ಮಾಡುವನು.
13 ಬಡವರೂ ಅಸಹಾಯಕರೂ ಅವನನ್ನೇ ಅವಲಂಭಿಸಿ
ಕೊಳ್ಳುವರು. ರಾಜನು ಅವರ ಪ್ರಾಣಗಳನ್ನು
ಕಾಪಾಡುವನು.
14 ಕ್ರೂರಿಗಳಿಂದ ಅವರನ್ನು ತಪ್ಪಿಸಿ ರಕ್ಷಿಸುವನು. ಆ
ಬಡವರ ಜೀವಗಳು ರಾಜನಿಗೆ ಅಮೂಲ್ಯವಾಗಿವೆ.
15 ರಾಜನು ಬಹುಕಾಲ ಬಾಳಲಿ! ಅವನಿಗೆ ಶೆಬಾ ಪ್ರಾಂತ್ಯ
ದಿಂದ ಬಂಗಾರವು ಬರಲಿ. ರಾಜನಿಗೋಸ್ಕರ
ಯಾವಾಗಲೂ ಪ್ರಾರ್ಥಿಸಿರಿ. ಪ್ರತಿದಿನವೂ ಅವನನ್ನು
ಆಶೀರ್ವದಿಸಿರಿ.
16 ಹೊಲಗಳು ಯಥೇಚ್ಛವಾಗಿ ಧಾನ್ಯಬೆಳೆಯಲಿ. ಬೆಟ್ಟ
ಗಳು ಬೆಳೆಗಳಿಂದ ತುಂಬಿಹೋಗಲಿ. ಹೊಲಗಳು ಲೆಬ
ನೋನಿನಲ್ಲಿರುವ ಹೊಲಗಳಂತೆ ಫಲವತ್ತಾಗಿರಲಿ.
ಬಯಲುಗಳು ಹುಲ್ಲಿನಿಂದ ಆವೃತವಾಗಿರುವಂತೆ
ಪಟ್ಟಣಗಳು ಜನರಿಂದ ತುಂಬಿಹೋಗಲಿ.
17 ರಾಜನು ಎಂದೆಂದಿಗೂ ಪ್ರಸಿದ್ಧನಾಗಿರಲಿ.
ಸೂರ್ಯನು ಇರುವವರೆಗೂ ಜನರು ಅವನ ಹೆಸ
ರನ್ನು ಜ್ಞಾಪಿಸಿಕೊಳ್ಳಲಿ. ಅವನಿಂದ ಜನರಿಗೆ ಆಶೀ
ರ್ವಾದವಾಗಲಿ. ಜನರೆಲ್ಲರೂ ಅವನನ್ನು
ಆಶೀರ್ವದಿಸಲಿ.
18 ಇಸ್ರೇಲರ ದೇವರಾದ ಯೆಹೋವನನ್ನು ಕೊಂಡಾ
ಡಿರಿ. ಅಂಥ ಅದ್ಭುತಕಾರ್ಯಗಳನ್ನು ದೇವರೊಬ್ಬನೇ
ಮಾಡಬಲ್ಲನು!
19 ಆತನ ಪ್ರಭಾವಪೂರ್ಣವಾದ ಹೆಸರನ್ನು ಎಂದೆಂ
ದಿಗೂ ಕೊಂಡಾಡಿರಿ! ಆತನ ಮಹಿಮೆ ಭೂಲೋಕವ
ನ್ನೆಲ್ಲಾ ತುಂಬಿಕೊಳ್ಳಲಿ! ಆಮೆನ್, ಆಮೆನ್!
20 ಇಷಯನ ಮಗನಾದ ದಾವೀದನ ಪ್ರಾರ್ಥನೆಗಳು
ಇಲ್ಲಿಗೆ ಮುಕ್ತಾಯಗೊಂಡವು.

# ಮೂರನೆ ಭಾಗ

## ಕೀರ್ತನೆ 73

*ಸ್ತುತಿಗೀತೆ*

*ರಚನೆಗಾರ: ಆಸಾಫ*

1 ದೇವರು ಇಸ್ರೇಲಿಗೆ ಒಳ್ಳೆಯವನೇ ನಿಜ! ಶುದ್ಧ
ಹೃದಯವುಳ್ಳವರಿಗೆ ದೇವರು ಒಳ್ಳೆಯವನೇ ಸರಿ!
2 ಆಗ ನನ್ನ ಕಾಲುಗಳು ಜಾರಿದವು; ನನ್ನ ಹೆಜ್ಜೆಗಳು
ತಪ್ಪಿದವು.
3 ದುಷ್ಟರ ಏಳಿಗೆಯನ್ನು ಕಂಡು ಗರ್ವಿಷ್ಠರ ಮೇಲೆ
ಅಸೂಯೆಗೊಂಡೆನು.

4 ಅವರು ಆರೋಗ್ಯವಂತರಾಗಿದ್ದಾರೆ. ಜೀವನೋಪಾ
ಯಕ್ಕಾಗಿ ಅವರು ಹೋರಾಡಬೇಕಿಲ್ಲ.*
5 ಆ ಗರ್ವಿಷ್ಠರು ನಮ್ಮಂತೆ ಕಷ್ಟಪಡುವುದಿಲ್ಲ. ಅವರಿಗೆ
ಬೇರೆಯವರಂತೆ ತೊಂದರೆಗಳಿಲ್ಲ.
6 ಆದ್ದರಿಂದ ಗರ್ವವು ಅವರಿಗೆ ಆಭರಣವಾಗಿದೆ;
ದ್ವೇಷವು ಅವರಿಗೆ ಉಡುಪಾಗಿದೆ.
7 ಅವರ ಕಣ್ಣುಗಳು ಕೊಬ್ಬಿವೆ; ಅವರ ಮನಸ್ಸು ದುಷ್ಕ
ಲ್ಪನೆಗಳಿಂದ ತುಂಬಿತುಳುಕುತ್ತದೆ.
8 ಅವರು ಗೇಲಿಮಾಡುತ್ತಾ ಬೇರೆಯವರ ವಿರುದ್ಧ ಕೆಟ್ಟ
ದ್ದನ್ನೇ ಮಾತಾಡುವರು. ಗರ್ವಿಷ್ಠರಾದ ಅವರು ಬೇರೆ
ಯವರ ಮೇಲೆ ಬಲಾತ್ಕಾರ ನಡೆಸಲು ಸಂಚು
ಮಾಡುವರು.
9 ಆ ಗರ್ವಿಷ್ಠರು ತಮ್ಮನ್ನು ದೇವರುಗಳೆಂದು ಭಾವಿಸಿ
ಕೊಂಡಿದ್ದಾರೆ, ತಾವೇ ಭೂಮಿಯ ಅಧಿಪತಿಗಳೆಂದು
ಆಲೋಚಿಸಿಕೊಂಡಿದ್ದಾರೆ.
10 ಆದ್ದರಿಂದ ದೇವರ ಮಕ್ಕಳೂ ಅವರ ಪಕ್ಷ ಹಿಡಿಯು
ವರು; ಅವರು ಹೇಳಿದಂತೆಯೇ ಮಾಡುವರು.
11 ‘‘ನಮ್ಮ ಕಾರ್ಯಗಳು ದೇವರಿಗೆ ಗೊತ್ತಿಲ್ಲ! ಮಹೋ
ನ್ನತನಾದ ದೇವರಿಗೆ ಗೊತ್ತೇ ಇಲ್ಲ!’’ ಎಂದು ಆ
ದುಷ್ಟರು ಹೇಳಿಕೊಳ್ಳುವರು.
12 ಆ ಗರ್ವಿಷ್ಠರು ದುಷ್ಟರೇ ಸರಿ! ಆದರೂ ಅವರ
ಐಶ್ವರ್ಯವು ಹೆಚ್ಚಾಗುತ್ತಲೇ ಇದೆ.
13 ಹೀಗಿರಲು, ನನ್ನ ಹೃದಯವನ್ನು ನಾನೇಕೆ ನಿರ್ಮಲ
ಗೊಳಿಸಿಕೊಳ್ಳಲಿ? ನನ್ನ ಕೈಗಳನ್ನು ನಾನೇಕೆ ಸ್ವಚ್ಛ
ಗೊಳಿಸಿಕೊಳ್ಳಲಿ?
14 ದೇವರೇ ದಿನವೆಲ್ಲಾ ನಾನು ಕಷ್ಟಪಡುತ್ತಿರುವೆ. ಪ್ರತಿ
ಮುಂಜಾನೆಯೂ ನೀನು ನನ್ನನ್ನು ಶಿಕ್ಷಿಸುವೆ.
15 ಇವುಗಳ ಬಗ್ಗೆ ನಾನು ಬೇರೆಯವರಿಗೆ ಹೇಳ
ಬೇಕೆಂದಿದ್ದೆ. ಒಂದು ವೇಳೆ ಹೇಳಿದ್ದರೆ, ನಿನ್ನ ಜನರಿಗೆ
ದ್ರೋಹಿಯಾಗುತ್ತಿದ್ದೆ.
16-17 ಇವುಗಳನ್ನು ಅರ್ಥಮಾಡಿಕೊಳ್ಳಲು ನಾನು ಬಹಳ
ವಾಗಿ ಪ್ರಯತ್ನಿಸಿದರೂ ನಿನ್ನಾಲಯಕ್ಕೆ ಹೋಗುವ
ವರೆಗೂ ಕಷ್ಟಕರವಾಗಿತ್ತು. ಆದರೆ ನಿನ್ನಾಲಯಕ್ಕೆ
ಹೋದಮೇಲೆ ನನಗೆ ಅರ್ಥವಾಯಿತು.
18 ನೀನು ಅವರನ್ನು ಅಪಾಯಕರವಾದ ಪರಿಸ್ಥಿತಿಯಲ್ಲಿ
ಇಟ್ಟಿರುವೆ. ಅವರು ಸುಲಭವಾಗಿ ಬಿದ್ದು ನಾಶ
ವಾಗುವರು.
19 ಇದ್ದಕ್ಕಿದ್ದಂತೆ ಆಪತ್ತು ಬರುವುದು, ಆಗ ಆ ಗರ್ವಿಷ್ಠರು
ನಾಶವಾಗುವರು. ಭಯಂಕರವಾದ ಸಂಗತಿಗಳು
ಅವರಿಗೆ ಸಂಭವಿಸುತ್ತವೆ; ಆಗ ಅವರು ಅಂತ್ಯ
ಗೊಳ್ಳುವರು.
20 ಯೆಹೋವನೇ, ನಾವು ನಿದ್ರೆಯಿಂದ ಎಚ್ಚರ
ಗೊಂಡಾಗ ಮರೆತುಬಿಡುವ ಕನಸಿನಂತಿದ್ದಾರೆ ಆ
ಜನರು. ನಾವು ಕನಸಿನಲ್ಲಿ ಕಾಣುವ ರಾಕ್ಷಸರಂತೆ
ನೀನು ಅವರನ್ನು ಮಾಯಗೊಳಿಸುವೆ.
21-22 ನಾನು ಬಹು ಮೂಢನಾಗಿದ್ದೆ. ಶ್ರೀಮಂತರ ಕುರಿ
ತಾಗಿಯೂ ದುಷ್ಟರ ಕುರಿತಾಗಿಯೂ ಆಲೋಚಿಸಿ
ಗಲಿಬಿಲಿಗೊಂಡೆ. ದೇವರೇ, ನಾನು ನಿನ್ನ ಮೇಲೆ
ಕೋಪಗೊಂಡಿದ್ದೆನು; ಬೇಸರಗೊಂಡಿದ್ದೆನು! ನಾನು
ಮೂಢಪಶುವಿನಂತೆ ವರ್ತಿಸಿದೆನು.
23 ನಾನು ಯಾವಾಗಲೂ ನಿನ್ನ ಸಂಗಡವಿದ್ದೇನೆ. ನನ್ನ
ಕೈಯನ್ನು ಹಿಡಿದುಕೊ.
24 ನನಗೆ ಉಪದೇಶಿಸುತ್ತಾ ನನ್ನನ್ನು ಮುನ್ನಡೆಸು. ಬಳಿಕ
ನಿನ್ನ ಮಹಿಮೆಗೆ ನನ್ನನ್ನು ಸೇರಿಸಿಕೊ.
25 ಪರಲೋಕದಲ್ಲಿ ನೀನಲ್ಲದೆ ನನಗೆ ಬೇರೆ ಯಾರ
ಅಗತ್ಯವಿದೆ? ಈ ಲೋಕದಲ್ಲಿ ನಿನ್ನನ್ನಲ್ಲದೆ ಬೇರೆ
ಯಾರನ್ನು ಬಯಸಲಿ?
26 ನನ್ನ ಹೃದಯವೂ ದೇಹವೂ ನಾಶವಾಗುತ್ತವೆ; ಆದರೆ
ಎಂದೆಂದಿಗೂ ನೀನೇ ನನಗೆ ಆಶ್ರಯಸ್ಥಾನವೂ ನನ್ನ
ದೇವರೂ ಆಗಿರುವೆ.
27 ನಿನ್ನನ್ನು ತೊರೆದುಬಿಟ್ಟವರು ನಾಶವಾಗುವರು. ನಿನಗೆ
ದ್ರೋಹಮಾಡಿದವರನ್ನೆಲ್ಲ ನೀನು ನಾಶಮಾಡುವೆ.
28 ನನಗಾದರೋ ದೇವರ ಸಮೀಪದಲ್ಲಿರುವುದೇ
ಭಾಗ್ಯವಾಗಿದೆ. ನನ್ನ ಒಡೆಯನಾದ ಯೆಹೋವನನ್ನು
ನನ್ನ ಆಶ್ರಯಸ್ಥಾನವನ್ನಾಗಿ ಮಾಡಿಕೊಂಡಿರುವೆ.
ದೇವರೇ, ನಿನ್ನ ಎಲ್ಲಾ ಕಾರ್ಯಗಳ ಕುರಿತಾಗಿ
ಹೇಳಲು ಬಂದಿರುವೆ.

## ಕೀರ್ತನೆ 74

*ರಚನೆಗಾರ: ಆಸಾಫ*

1 ದೇವರೇ, ನಮ್ಮನ್ನು ಶಾಶ್ವತವಾಗಿ ಕೈಬಿಟ್ಟಿರುವೆಯಾ?
ನಿನ್ನ ಜನರ ಮೇಲೆ ಇನ್ನೂ ಕೋಪದಿಂದಿರುವೆಯಾ?
2 ಬಹುಕಾಲದ ಹಿಂದೆ ನೀನು ಕೊಂಡುಕೊಂಡ ನಿನ್ನ
ಜನರನ್ನು ಜ್ಞಾಪಿಸಿಕೊ. ನೀನು ನಮ್ಮನ್ನು ರಕ್ಷಿಸಿದೆ.
ನಾವು ನಿನ್ನವರೇ. ನೀನು ವಾಸಿಸಿದ ಚೀಯೋನ್
ಪರ್ವತವನ್ನು ಜ್ಞಾಪಿಸಿಕೊ.
3 ಬಹುಕಾಲದಿಂದ ಹಾಳುಬಿದ್ದಿರುವ ಕಟ್ಟಡಗಳ ಬಳಿಗೆ
ಆಗಮಿಸು. ಶತ್ರುವು ನಾಶಮಾಡಿದ ನಿನ್ನ ಪವಿತ್ರ ಸ್ಥಳಕ್ಕೆ
ಹಿಂತಿರುಗಿ ಬಾ.
4 ಆಲಯದಲ್ಲಿ ಶತ್ರುಗಳು ಯುದ್ಧಾರ್ಭಟ ಮಾಡಿ
ದರು. ಆಲಯದಲ್ಲಿ ತಮ್ಮ ಧ್ವಜಾರೋಹಣ ಮಾಡಿ
ತಮ್ಮ ಜಯವನ್ನು ಸೂಚಿಸಿದರು.
5 ಶತ್ರು ಸೈನಿಕರಾದರೋ ಕಳೆಗುದ್ದಲಿಯಿಂದ ಕಳೆ
ಕೀಳುತ್ತಿರುವ ಜನರಂತಿದ್ದಾರೆ.
6 ನಿನ್ನಾಲಯದ ಕೆತ್ತನೆ ಕೆಲಸಗಳನ್ನು ಅವರು ಕೊಡಲಿ
ಗಳಿಂದಲೂ ಮಚ್ಚುಗತ್ತಿಗಳಿಂದಲೂ ಕತ್ತರಿಸಿ
ಹಾಕಿದರು.

---

**ಅವರು ಹೋರಾಡಬೇಕಿಲ್ಲ** ಅಕ್ಷರಶಃ ‘ಅವರ ಮರಣವು ನಿರ್ಬಾಧಕವಾಗಿದೆ.’

7 ಆ ಸೈನಿಕರು ನಿನ್ನ ಪವಿತ್ರ ಸ್ಥಳವನ್ನು ಸುಟ್ಟು ನೆಲಸಮ ಮಾಡಿದರು. ಆ ಆಲಯವು ನಿನ್ನ ನಾಮ ಘನತೆಗಾಗಿ ಕಟ್ಟಲ್ಪಟ್ಟಿತ್ತಲ್ಲಾ!

8 ನಮ್ಮನ್ನು ಸಂಪೂರ್ಣವಾಗಿ ಜಜ್ಜಿಹಾಕಲು ಶತ್ರುಗಳು ನಿರ್ಧರಿಸಿ ದೇಶದ ಪ್ರತಿಯೊಂದು ಪವಿತ್ರ ಸ್ಥಳವನ್ನೂ ಸುಟ್ಟುಹಾಕಿದರು.

9 ನಮ್ಮ ಯಾವ ಚಿಹ್ನೆಗಳೂ ನಮಗೆ ಕಾಣಲಿಲ್ಲ. ಪ್ರವಾದಿಗಳಲ್ಲಿ ಯಾರೂ ಉಳಿದಿಲ್ಲ. ಯಾರಿಗೂ ದಿಕ್ಕೇ ತೋಚುತ್ತಿಲ್ಲ.

10 ದೇವರೇ, ಇನ್ನೆಷ್ಟರವರೆಗೆ ಶತ್ರುಗಳು ನಮ್ಮನ್ನು ಗೇಲಿ ಮಾಡುತ್ತಿರಬೇಕು? ನಿನ್ನ ಹೆಸರಿಗೆ ಅವರು ಅವಮಾನ ಮಾಡುತ್ತಲೇ ಇರಬೇಕೇ?

11 ನೀನು ನಮ್ಮನ್ನು ಬಹು ಕಠಿಣವಾಗಿ ದಂಡಿಸಿದ್ದೇಕೆ? ನಿನ್ನ ಮಹಾಶಕ್ತಿಯಿಂದ ನಮ್ಮನ್ನು ಸಂಪೂರ್ಣವಾಗಿ ನಾಶಮಾಡಿರುವಿಯಲ್ಲಾ!

12 ದೇವರೇ, ಬಹುಕಾಲದಿಂದ ನೀನು ನಮ್ಮ ರಾಜ. ಈ ದೇಶದಲ್ಲಿ ಅನೇಕ ಯುದ್ಧಗಳನ್ನು ಗೆಲ್ಲಲು ನೀನು ನಮಗೆ ಸಹಾಯಮಾಡಿದೆ.

13 ಮಹಾಶಕ್ತಿಯಿಂದ ಕೆಂಪು ಸಮುದ್ರವನ್ನು ಇಬ್ಭಾಗ ಮಾಡಿದಾತನು ನೀನೇ.

14 ಸಮುದ್ರದಲ್ಲಿ ಮಹಾ ತಿಮಿಂಗಲಗಳ ತಲೆಗಳನ್ನು ಜಜ್ಜಿ ಹಾಕಿದಾತನು ನೀನೇ. ಲಿವ್ಯಾತಾನನ ತಲೆಗಳನ್ನು ಜಜ್ಜಿ ಹಾಕಿ ಪ್ರಾಣಿಗಳಿಗೆ ಆಹಾರವನ್ನಾಗಿ ಮಾಡಿದಾತನು ನೀನೇ.

15 ತೊರೆಗಳೂ ನದಿಗಳೂ ಹರಿಯುವಂತೆ ಮಾಡುವಾತನು ನೀನೇ. ನದಿಗಳನ್ನು ಒಣಗಿಸುವಾತನೂ ನೀನೇ.

16 ನೀನು ಹಗಲನ್ನೂ ರಾತ್ರಿಯನ್ನೂ ನಿನ್ನ ಹತೋಟಿಯಲ್ಲಿಟ್ಟುಕೊಂಡಿರುವೆ. ಸೂರ್ಯನನ್ನೂ ಚಂದ್ರನನ್ನೂ ಸೃಷ್ಟಿಮಾಡಿದಾತನು ನೀನೇ.

17 ಭೂಮಿಯ ಮೇಲೆ ಮೇರೆಗಳನ್ನು ಹಾಕಿರುವಾತನು ನೀನೇ. ಬೇಸಿಗೆಕಾಲವನ್ನೂ ಚಳಿಕಾಲವನ್ನೂ ನಿರ್ಮಿಸಿದಾತನು ನೀನೇ.

18 ದೇವರೇ, ಇವುಗಳನ್ನೆಲ್ಲಾ ಜ್ಞಾಪಿಸಿಕೊ. ವೈರಿಯು ನಿನಗೆ ಮಾಡಿದ ಅವಮಾನವನ್ನು ನೆನಸಿಕೊ! ಆ ಮೂರ್ಖರು ನಿನ್ನ ನಾಮವನ್ನು ದ್ವೇಷಿಸುತ್ತಾರೆ.

19 ದೇವರೇ, ನಿನ್ನ ಪಾರಿವಾಳವನ್ನು ಆ ದುಷ್ಟಪ್ರಾಣಿಗಳು ತೆಗೆದುಕೊಳ್ಳದಿರಲಿ. ನಿನ್ನ ಬಡಜನರನ್ನು ಮರೆತೇ ಬಿಡಬೇಡ.

20 ನಮ್ಮ ಒಡಂಬಡಿಕೆಯನ್ನು ಜ್ಞಾಪಿಸಿಕೊ. ಈ ದೇಶದ ಕತ್ತಲೆಯ ಸ್ಥಳಗಳಲ್ಲೆಲ್ಲಾ ಹಿಂಸೆಯೂ ತುಂಬಿಕೊಂಡಿದೆ.

21 ದೇವರೇ, ನಿನ್ನ ಜನರಿಗೆ ಅವಮಾನವಾಗಿದೆ. ಅವರಿಗೆ ಕೇಡಾಗಲು ಬಿಡಬೇಡ. ನಿನ್ನ ಬಡಜನರೂ ನಿಸ್ಸಹಾಯಕರೂ ನಿನ್ನನ್ನು ಕೊಂಡಾಡಲಿ.

22 ದೇವರೇ, ಎದ್ದು ಹೋರಾಡು! ನಿನಗೆ ಸವಾಲೊಡ್ಡಿದ ಆ ಮೂಢರನ್ನು ಜ್ಞಾಪಿಸಿಕೊ!

23 ನಿನ್ನ ವೈರಿಗಳ ಆರ್ಭಟವನ್ನು ಮರೆತುಬಿಡಬೇಡ. ಅವರು ನಿನಗೆ ಪದೇಪದೇ ಅವಮಾನಮಾಡಿದರು.

## ಕೀರ್ತನೆ 75

*ಸ್ತುತಿಗೀತೆ*

*ರಚನೆಗಾರ: ಆಸಾಫ*

1 ದೇವರೇ, ನಿನ್ನನ್ನು ಕೊಂಡಾಡುವೆವು! ನಿನ್ನ ಹೆಸರನ್ನು ಸ್ತುತಿಸುವೆವು; ಯಾಕಂದರೆ ನೀನು ನನ್ನ ಸಾಮಿಪ್ಯದಲ್ಲಿರುವೆ; ನಿನ್ನ ಮಹತ್ಕಾರ್ಯಗಳ ಬಗ್ಗೆ ಜನರು ಹೇಳುತ್ತಲೇ ಇದ್ದಾರೆ.

2 ದೇವರು ಇಂತೆನ್ನುತ್ತಾನೆ: ‘‘ನಾನು ನ್ಯಾಯತೀರ್ಪಿಗಾಗಿ ತಕ್ಕ ಸಮಯವನ್ನು ಗೊತ್ತುಪಡಿಸುವೆ; ನೀತಿಯಿಂದಲೇ ತೀರ್ಪುಕೊಡುವೆ.

3 ಭೂಮಿಯು ಅದರ ಮೇಲಿರುವ ಸಮಸ್ತದೊಡನೆ ನಡುಗುತ್ತಿದ್ದರೂ ಭೂಸ್ತಂಭಗಳನ್ನು ಸ್ಥಿರಗೊಳಿಸುವಾತನು ನಾನೇ.’’

4-5‘‘ಗರ್ವಿಷ್ಠರೇ, ‘ಕೊಚ್ಚಿಕೊಳ್ಳಬೇಡಿ’ ದುಷ್ಟರೇ, ‘ಅಹಂಕಾರಪಡಬೇಡಿ!’’’ ಎಂದು ಹೇಳುವೆನು.

6 ಭೂಲೋಕದ ಯಾವ ಶಕ್ತಿಯೂ ಮನುಷ್ಯನನ್ನು ಉದ್ಧಾರ ಮಾಡಲಾರದು.

7 ನ್ಯಾಯಾಧಿಪತಿಯು ದೇವರೇ. ಯಾರನ್ನು ಉದ್ಧಾರ ಮಾಡಬೇಕು ಎಂಬ ನಿರ್ಣಯವನ್ನು ತೆಗೆದುಕೊಳ್ಳುವಾತನು ದೇವರೇ. ದೇವರು ಒಬ್ಬನನ್ನು ಉನ್ನತಿಗೇರಿಸುವನು; ಮತ್ತೊಬ್ಬನನ್ನು ಅವನತಿಗಿಳಿಸುವನು.

8 ಯೆಹೋವನ ಕೈಯಲ್ಲಿ ಪಾತ್ರೆಯಿದೆ. ಆ ಪಾತ್ರೆಯು ವಿಷದ್ರಾಕ್ಷಾರಸದಿಂದ ತುಂಬಿದೆ. ಆತನು ದಂಡನೆಯೆಂಬ ಆ ವಿಷದ್ರಾಕ್ಷಾರಸವನ್ನು ಸುರಿಯುವನು; ದುಷ್ಟರು ಕೊನೆಯ ತೊಟ್ಟಿನವರೆಗೂ ಅದನ್ನು ಕುಡಿಯುವರು!

9 ನಾನು ಇವುಗಳ ಬಗ್ಗೆ ಜನರಿಗೆ ಹೇಳುತ್ತಲೇ ಇರುವೆನು; ಇಸ್ರೇಲರ ದೇವರನ್ನು ಸಂಕೀರ್ತಿಸುವೆನು.

10 ದುಷ್ಟರಿಂದ ಅಧಿಕಾರವನ್ನು ಕಿತ್ತುಕೊಂಡು ಒಳ್ಳೆಯವರಿಗೆ ಅದನ್ನು ಒಪ್ಪಿಸಿಕೊಡುವೆನು.

## ಕೀರ್ತನೆ 76

*ಸ್ತುತಿಗೀತೆ ರಚನೆಗಾರ: ಆಸಾಫ*

1 ಯೆಹೂದದ ಜನರು ದೇವರನ್ನು ಬಲ್ಲವರೇ ಸರಿ! ಇಸ್ರೇಲಿನ ಜನರು ಆತನ ನಾಮವನ್ನು ಗೌರವಿಸುವರು.

2 ದೇವಾಲಯವು ಸಾಲೇಮಿನಲ್ಲಿದೆ.* ದೇವಾಲಯವು
ಸಿಯೋನ್ ಬೆಟ್ಟದ ಮೇಲಿದೆ.
3 ಆ ಸ್ಥಳದಲ್ಲಿ ದೇವರು ಬಿಲ್ಲುಬಾಣಗಳನ್ನೂ ಗುರಾಣಿ
ಗಳನ್ನೂ ಖಡ್ಗಗಳನ್ನೂ ಇತರ ಯುದ್ಧಾಯುಧ
ಗಳನ್ನೂ ನುಚ್ಚುನೂರು ಮಾಡಿದ್ದಾನೆ.
4 ದೇವರೇ, ಶತ್ರುಗಳನ್ನು ಸೋಲಿಸಿ ಬೆಟ್ಟಗಳಿಂದ
ಇಳಿದು ಬರುವಾಗ ನೀನು ತೇಜೋಮಯ
ನಾಗಿರುವೆ.
5 ಆ ಸೈನಿಕರು ತಾವೇ ಶಕ್ತಿವಂತರೆಂದುಕೊಂಡಿದ್ದರು.
ಆದರೆ ಈಗ ಅವರು ಬಯಲುಗಳಲ್ಲಿ ಸತ್ತುಬಿದ್ದಿದ್ದಾರೆ.
ಅವರು ಧರಿಸಿಕೊಂಡಿದ್ದವುಗಳನ್ನೆಲ್ಲ ಸುಲಿಗೆ ಮಾಡ
ಲಾಗಿದೆ. ಆ ಸೈನಿಕರಲ್ಲಿ ಯಾರೂ ತಮ್ಮನ್ನು ಸಂರಕ್ಷಿಸಿ
ಕೊಳ್ಳಲಾಗಲಿಲ್ಲ.
6 ಯಾಕೋಬನ ದೇವರು ಆ ಸೈನಿಕರನ್ನು ಗದರಿಸಲು
ರಥಾಶ್ವಗಳ ಸೇನೆಯು ಮೂರ್ಛೆಗೊಂಡಿತು.
7 ದೇವರೇ, ನೀನು ಭಯಂಕರನೇ ಸರಿ! ನೀನು ಕೋಪ
ಗೊಂಡಿರುವಾಗ ನಿನಗೆ ವಿರೋಧವಾಗಿ ಯಾರು
ನಿಂತುಕೊಳ್ಳಬಲ್ಲರು?
8-9 ಯೆಹೋವನು ಎದ್ದು ನಿಂತು ತನ್ನ ನ್ಯಾಯತೀರ್ಪನ್ನು
ಪ್ರಕಟಿಸಿದನು. ದೇವರು ಲೋಕದ ದೀನರನ್ನು ರಕ್ಷಿಸಿ
ದನು. ಆತನು ಪರಲೋಕದಿಂದ ತೀರ್ಮಾನ ನೀಡು
ತ್ತಿರಲು ಭೂಲೋಕವೆಲ್ಲಾ ಭಯದಿಂದ ಸ್ತಬ್ಧ
ವಾಯಿತು.
10 ದೇವರೇ, ನೀನು ದುಷ್ಟರನ್ನು ದಂಡಿಸುವಾಗ ಜನರು
ನಿನ್ನನ್ನು ಕೊಂಡಾಡುವರು; ನಿನ್ನ ಕೋಪವನ್ನು
ತೋರಿಸುವಾಗ ಅಳಿದುಳಿದವರು ಬಲಿಷ್ಠರಾಗುವರು.
11 ದೇವರಾದ ಯೆಹೋವನಿಗೆ ಹರಕೆಗಳನ್ನು ಮಾಡಿದ
ವರೇ, ನಿಮ್ಮ ಹರಕೆಗಳನ್ನು ಸಲ್ಲಿಸಿರಿ. ಸರ್ವಭೂನಿ
ವಾಸಿಗಳೇ, ದೇವರಲ್ಲಿ ಭಯಭಕ್ತಿಯುಳ್ಳವರಾಗಿರಿ.
12 ಆತನು ಮಹಾನಾಯಕರುಗಳನ್ನು ಸೋಲಿಸುವನು.
ಭೂ ರಾಜರುಗಳೆಲ್ಲಾ ಆತನಿಗೆ ಭಯಪಡುವರು.

## ಕೀರ್ತನೆ 77

*ರಚನೆಗಾರ: ಆಸಾಫ*

1 ನಾನು ಸ್ವರವೆತ್ತಿ ದೇವರಿಗೆ ಮೊರೆಯಿಡುವೆನು.
ದೇವರೇ, ಸ್ವರವೆತ್ತಿ ಮೊರೆಯಿಡುವೆನು, ನನಗೆ
ಕಿವಿಗೊಡು.
2 ನನ್ನ ಯೆಹೋವನೇ, ಇಕ್ಕಟ್ಟಿನಲ್ಲಿ ನಿನ್ನನ್ನು ಕರೆದೆನು;
ರಾತ್ರಿಯೆಲ್ಲಾ ನಿನಗಾಗಿ ಕೈಚಾಚಿಕೊಂಡಿದ್ದೆನು. ಆದರೆ
ನನ್ನ ಮನಸ್ಸು ಸಮಾಧಾನಗೊಳ್ಳಲಿಲ್ಲ.
3 ನಾನು ದೇವರನ್ನೇ ಧ್ಯಾನಿಸುತ್ತಾ ನನ್ನ ವ್ಯಥೆಯನ್ನು
ಹೇಳಿಕೊಳ್ಳಬಯಸಿದೆ. ಆದರೂ ನನ್ನಿಂದಾಗದು.
4 ನೀನು ನನಗೆ ನಿದ್ರೆಮಾಡಗೊಡಿಸಲಿಲ್ಲ. ನಾನು ಬಹು
ಗಲಿಬಿಲಿಗೊಂಡಿದ್ದರಿಂದ ನಿನ್ನೊಂದಿಗೆ ಮಾತಾಡ
ಲಾಗಲಿಲ್ಲ.
5 ಹಿಂದಿನಕಾಲದ ಬಗ್ಗೆ ಯೋಚಿಸತೊಡಗಿದೆನು. ಬಹು
ಕಾಲದ ಹಿಂದೆ ನಡೆದ ಸಂಗತಿಗಳ ಬಗ್ಗೆ ಯೋಚಿಸ
ತೊಡಗಿದೆನು.
6 ರಾತ್ರಿಯಲ್ಲಿ, ನಾನು ಮಾಡುತ್ತಿದ್ದ ಗಾನವನ್ನು ನೆನಸಿ
ಕೊಳ್ಳುವೆನು; ಅಂತರ್ಯದಲ್ಲಿ ಮಾತಾಡುತ್ತಾ ಅರ್ಥ
ಮಾಡಿಕೊಳ್ಳಲು ಪ್ರಯತ್ನಿಸುವೆನು.
7 ನಾನು ಆಶ್ಚರ್ಯದಿಂದ ಹೀಗಂದುಕೊಳ್ಳುವೆನು:
“ನಮ್ಮ ಯೆಹೋವನು ನಮ್ಮನ್ನು ಶಾಶ್ವತವಾಗಿ ಕೈಬಿಟ್ಟಿ
ರುವನೇ? ಆತನು ನಮ್ಮನ್ನು ಮತ್ತೆಂದಾದರೂ
ಅಪೇಕ್ಷಿಸುವನೇ?
8 ದೇವರ ಕೃಪಾವಾತ್ಸಲ್ಯವು ಎಂದೆಂದಿಗೂ ನಿಂತು
ಹೋಯಿತೇ? ಆತನು ನಮ್ಮೊಂದಿಗೆ ಮತ್ತೆಂದೂ
ಮಾತಾಡುವುದಿಲ್ಲವೇ?
9 ದೇವರು ಕರುಣೆಯನ್ನು ಮರೆತುಬಿಟ್ಟಿರುವನೇ?
ಆತನ ಕನಿಕರವು ಬದಲಾವಣೆ ಹೊಂದಿ ಕೋಪ
ವಾಗಿರುವುದೇ?”
10 ಬಳಿಕ ನಾನು ಹೀಗೆ ಆಲೋಚಿಸಿಕೊಂಡೆ: “‘ಮಹೋ
ನ್ನತನಾದ ದೇವರು ತನ್ನ ಶಕ್ತಿಯನ್ನು ಕಳೆದು
ಕೊಂಡನೇ?’ ಎಂಬುದೇ ನನ್ನನ್ನು ಕಾಡಿಸುವ ಪ್ರಶ್ನೆ”
11 ಯೆಹೋವನೇ, ನಿನ್ನ ಕಾರ್ಯಗಳನ್ನು ಜ್ಞಾಪಿಸಿಕೊಳ್ಳು
ವೆನು. ಬಹುಕಾಲದ ಹಿಂದೆ ನೀನು ಮಾಡಿದ ಅದ್ಭುತ
ಕಾರ್ಯಗಳನ್ನು ಜ್ಞಾಪಿಸಿಕೊಳ್ಳುವೆನು.
12 ನಿನ್ನ ಕಾರ್ಯಗಳನ್ನೆಲ್ಲಾ ಧ್ಯಾನಿಸುವೆನು; ನಿನ್ನ ಕಾರ್ಯ
ಗಳ ಕುರಿತಾಗಿ ಆಲೋಚಿಸುವೆನು.
13 ದೇವರೇ, ನಿನ್ನ ಮಾರ್ಗಗಳು ಪರಿಶುದ್ಧವಾಗಿವೆ.
ದೇವರೇ, ನಿನ್ನಂತೆ ಮಹತ್ವವುಳ್ಳವರು ಬೇರೆ ಯಾರೂ
ಇಲ್ಲ.
14 ಅದ್ಭುತಕಾರ್ಯಗಳನ್ನು ಮಾಡಿದ ದೇವರು ನೀನೇ.
ನೀನು ಜನರಿಗೆ ನಿನ್ನ ಮಹಾಶಕ್ತಿಯನ್ನು ತೋರಿಸಿದೆ.
15 ನೀನು ನಿನ್ನ ಶಕ್ತಿಯಿಂದ ನಿನ್ನ ಜನರನ್ನು ರಕ್ಷಿಸಿದೆ.
ಯಾಕೋಬನ ಮತ್ತು ಯೋಸೇಫನ ಸಂತತಿಯ
ವರನ್ನು ನೀನು ರಕ್ಷಿಸಿದೆ.
16 ದೇವರೇ, ನಿನ್ನನ್ನು ಕಂಡು ನೀರು ಭಯಗೊಂಡಿತು.
ಆಳವಾದ ನೀರು ಭಯದಿಂದ ನಡುಗಿತು.
17 ದಟ್ಟವಾದ ಕಪ್ಪುಮೋಡಗಳು ಮಳೆಗರೆದವು. ಜನರಿಗೆ
ಮೇಘಮಂಡಲದಿಂದ ಗುಡುಗು ಕೇಳಿಸಿತು. ನಿನ್ನ
ಮಿಂಚಿನ ಬಾಣಗಳು ಆ ಮೋಡಗಳಲ್ಲಿ ಹಾರಿದವು.

---

**ಸಾಲೇಮ್** ಜೆರುಸಲೇಮಿನ ಮತ್ತೊಂದು ಹೆಸರು. ಈ ಹೆಸರಿನ ಅರ್ಥ, “ಶಾಂತಿ.”

18 ಬಿರುಗಾಳಿಯಲ್ಲಿ ನಿನ್ನ ಗುಡುಗು ಕೇಳಿಸಿತು. ಮಿಂಚು
ಗಳು ಭೂಮಂಡಲವನ್ನು ಬೆಳಗಿಸಿದವು. ಭೂಮಿಯು
ಅಲ್ಲಾಡಿ ಕಂಪಿಸಿತು.
19 ನೀನು ಸಮುದ್ರದಲ್ಲಿ ಮಾರ್ಗಮಾಡಿದೆ; ಆಳವಾದ
ಜಲರಾಶಿಗಳನ್ನು ದಾಟಿದೆ. ಆದರೆ ನಿನ್ನ ಹೆಜ್ಜೆಯ
ಗುರುತು ಕಾಣಲೇ ಇಲ್ಲ.
20 ಕುರುಬನು ಕುರಿಹಿಂಡನ್ನು ಕರೆದೊಯ್ಯುವಂತೆ ನಿನ್ನ
ಪ್ರಜೆಯನ್ನು ಕರೆದೊಯ್ಯಲು ಮೋಶೆಯನ್ನೂ
ಆರೋನನನ್ನೂ ಉಪಯೋಗಿಸಿದೆ.

## ಕೀರ್ತನೆ 78

*ರಚನೆಗಾರ: ಆಸಾಫ*

1 ನನ್ನ ಜನರೇ, ನನ್ನ ಉಪದೇಶಗಳಿಗೆ ಕಿವಿಗೊಡಿರಿ;
ನನ್ನ ನುಡಿಗಳನ್ನು ಲಾಲಿಸಿರಿ.
2 ನಾನು ಬಾಯ್ದೆರೆದು ಸಾಮ್ಯರೂಪವಾಗಿ ಉಪದೇಶಿ
ಸುವೆನು; ಪೂರ್ವಕಾಲದ ಗೂಡಾರ್ಥಗಳನ್ನು ಹೊರ
ಪಡಿಸುವೆನು.
3 ನಾವು ಅವುಗಳನ್ನು ಕಿವಿಯಾರೆ ಕೇಳಿದ್ದೇವೆ. ನಮ್ಮ
ಪೂರ್ವಿಕರೇ ಅವುಗಳನ್ನು ನಮಗೆ ಹೇಳಿದರು.
4 ನಾವು ಅವುಗಳನ್ನು ಮರೆಯುವುದೇ ಇಲ್ಲ. ನಮ್ಮ
ಜನರು ಕೊನೆಯ ತಲೆಮಾರಿನವರೆಗೂ ಅವುಗಳನ್ನು
ಹೇಳುತ್ತಲೇ ಇರುವರು. ನಾವೆಲ್ಲರೂ ಯೆಹೋವನ
ಪರಾಕ್ರಮವನ್ನೂ ಅದ್ಭುತಕಾರ್ಯಗಳನ್ನೂ
ಹೇಳುತ್ತಾ ಕೊಂಡಾಡುವೆವು.
5 ಆತನು ಯಾಕೋಬನೊಂದಿಗೆ ಒಡಂಬಡಿಕೆಯನ್ನು
ಮಾಡಿಕೊಂಡನು. ಆತನು ಇಸ್ರೇಲರಿಗೆ ಧರ್ಮಶಾಸ್ತ್ರ
ವನ್ನು ಕೊಟ್ಟನು. ಆತನು ನಮ್ಮ ಪೂರ್ವಿಕರಿಗೆ ಆಜ್ಞೆ
ಗಳನ್ನು ಕೊಟ್ಟನು. ನಿಮ್ಮ ಸಂತತಿಗಳವರಿಗೆ ಧರ್ಮ
ಶಾಸ್ತ್ರವನ್ನು ಉಪದೇಶಿಸಿರಿ ಎಂದು ಆತನು ನಮ್ಮ
ಪೂರ್ವಿಕರಿಗೆ ಹೇಳಿದನು.
6 ಹೊಸ ತಲೆಮಾರುಗಳವರು ಬೆಳೆದು ದೊಡ್ಡವರಾ
ದಾಗ ತಮ್ಮ ಮಕ್ಕಳಿಗೆ ಅವುಗಳನ್ನು ಹೇಳಿಕೊಡುವರು.
ಹೀಗೆ ಜನರು ಕೊನೆಯ ತಲೆಮಾರಿನವರೆಗೂ ಧರ್ಮ
ಶಾಸ್ತ್ರವನ್ನು ತಿಳಿದಿರುವರು.
7 ಆಗ ಅವರೆಲ್ಲರೂ ದೇವರಲ್ಲಿ ಭರವಸೆ ಇಡುವರು.
ದೇವರ ಮಹತ್ಕಾರ್ಯಗಳನ್ನು ಅವರು ಮರೆಯು
ವುದೇ ಇಲ್ಲ. ಅವರು ಜಾಗ್ರತೆಯಿಂದ ದೇವರ ಆಜ್ಞೆ
ಗಳಿಗೆ ವಿಧೇಯರಾಗುವರು.
8 ಜನರು ತಮ್ಮ ಮಕ್ಕಳಿಗೆ ದೇವರ ಆಜ್ಞೆಗಳನ್ನು ಉಪ
ದೇಶಿಸಿದರೆ, ಮಕ್ಕಳು ತಮ್ಮ ಪೂರ್ವಿಕರಂತಾಗುವು
ದಿಲ್ಲ. ಅವರ ಪೂರ್ವಿಕರು ದೇವರಿಗೆ ವಿಮುಖರಾಗಿ
ಆತನಿಗೆ ವಿಧೇಯರಾಗಲಿಲ್ಲ. ಅವರು ಮೊಂಡರಾಗಿ
ದ್ದರು. ಅವರು ದೇವರಿಗೆ ನಂಬಿಗಸ್ತರಾಗಿರಲಿಲ್ಲ.
9 ಎಫ್ರಾಯಿಮ್ ಕುಲದವರು ಬಿಲ್ಲುಗಳಿಂದ ಸುಸಜ್ಜಿತ
ರಾಗಿದ್ದರು. ಆದರೆ ಅವರು ಯುದ್ಧದಿಂದ ಓಡಿ
ಹೋದರು.
10 ದೇವರೊಂದಿಗೆ ಮಾಡಿಕೊಂಡಿದ್ದ ಒಡಂಬಡಿಕೆ
ಯನ್ನು ಅವರು ಪಾಲಿಸಲಿಲ್ಲ. ಅವರು ಆತನ ಉಪ
ದೇಶಗಳಿಗೆ ವಿಧೇಯರಾಗಲಿಲ್ಲ.
11 ದೇವರ ಮಹತ್ಕಾರ್ಯಗಳನ್ನೂ ಆತನು ಅವರಿಗೆ
ತೋರಿಸಿದ ಸೂಚಕಕಾರ್ಯಗಳನ್ನೂ ಎಫ್ರಾಯಿಮಿನ
ಜನರು ಮರೆತುಬಿಟ್ಟರು.
12 ಈಜಿಪ್ಟಿನ ಸೋನ್ ಪ್ರದೇಶದಲ್ಲಿ ಅವರ ಪೂರ್ವಿಕ
ರಿಗೆ ದೇವರು ತನ್ನ ಮಹಾಶಕ್ತಿಯನ್ನು ತೋರಿಸಿದನು.
13 ದೇವರು ಕೆಂಪು ಸಮುದ್ರವನ್ನು ಇಬ್ಭಾಗಮಾಡಿ
ಅವರನ್ನು ದಾಟಿಸಿದನು. ಅವರ ಎರಡು ಕಡೆಗಳಲ್ಲಿ
ನೀರು ಬಲವಾದ ಗೋಡೆಯಂತೆ ನಿಂತುಕೊಂಡಿತು.
14 ಹಗಲಿನಲ್ಲಿ ಮೋಡದಿಂದಲೂ ಇರುಳಿನಲ್ಲಿ ಬೆಂಕಿಯ
ಬೆಳಕಿನಿಂದಲೂ ಅವರನ್ನು ಮುನ್ನಡಿಸಿದನು.
15 ದೇವರು ಅರಣ್ಯದಲ್ಲಿ ಬಂಡೆಯನ್ನು ಸೀಳಿ ನೀರನ್ನು
ಸಮೃದ್ಧಿಕರವಾಗಿ ಒದಗಿಸಿದನು.
16 ಆತನು ಬಂಡೆಯಿಂದ ನೀರನ್ನು ನದಿಯಂತೆ ಬರ
ಮಾಡಿದನು.
17 ಆದರೂ ಅವರು ಅರಣ್ಯದಲ್ಲಿ ಮಹೋನ್ನತನಾದ
ಆತನ ವಿರೋಧವಾಗಿ ಪಾಪಮಾಡುತ್ತಾ ಬಂದರು.
18 ಬಳಿಕ ಅವರು ತಮ್ಮ ಆಸೆಯನ್ನು ಈಡೇರಿಸಿಕೊಳ್ಳಲು
ಇಷ್ಟಪದಾರ್ಥವನ್ನು ಕೇಳಿ ದೇವರನ್ನೇ ಪರೀಕ್ಷೆ
ಗೊಡ್ಡಿದರು.
19 ಅವರು ಆತನಿಗೆ ವಿರೋಧವಾಗಿ ಮಾತಾಡಿ, ದೇವರು
ನಮಗೆ ಅರಣ್ಯದಲ್ಲಿ ಆಹಾರವನ್ನು ಕೊಡಬಲ್ಲನೇ?
20 ಆತನು ಬಂಡೆಯನ್ನು ಹೊಡೆದಾಗ ನೀರು ಪ್ರವಾಹ
ದಂತೆ ಹೊರಬಂದದ್ದೇನೊ ನಿಜ! ಆದರೆ ಆತನು
ನಮಗೆ ರೊಟ್ಟಿಯನ್ನೂ ಮಾಂಸವನ್ನೂ ಕೊಡ
ಬಲ್ಲನೇ!'' ಎಂದು ಹೇಳಿದರು.
21 ಆ ಜನರು ಹೇಳಿದ್ದನ್ನು ಕೇಳಿ ಯೆಹೋವನು ಕೋಪ
ಗೊಂಡನು. ಆತನು ಯಾಕೋಬ್ಯರ ಮೇಲೆಯೂ
ಇಸ್ರೇಲರ ಮೇಲೆಯೂ ಕೋಪಗೊಂಡನು.
22 ಯಾಕಂದರೆ ಜನರು ಆತನಲ್ಲಿ ಭರವಸೆ ಇಡಲಿಲ್ಲ.
ದೇವರು ತಮ್ಮನ್ನು ರಕ್ಷಿಸಬಲ್ಲನೆಂದು ಅವರು
ನಂಬಲಿಲ್ಲ.
23 ಆಗ ಆತನು ಉನ್ನತದಲ್ಲಿರುವ ಮೇಘಗಳನ್ನು
ತೆರೆದನು, ಅವರ ಆಹಾರಕ್ಕಾಗಿ ಮನ್ನವನ್ನು*
ಮಳೆಗರೆಸಿದನು.

---

**ಮನ್ನ** ಇಸ್ರೇಲರು ಅರಣ್ಯದಲ್ಲಿ ನಲವತ್ತು ವರ್ಷಗಳ ಕಾಲ ಅಲೆಮಾರಿ
ಗಳಾಗಿದ್ದಾಗ, ದೇವರು ಅವರಿಗಾಗಿ ಕಳುಹಿಸಿದ ವಿಶೇಷವಾದ ಆಹಾರ.

24 ಆಕಾಶದ ದ್ವಾರಗಳು ತೆರೆದು ಆಕಾಶದ ಉಗ್ರಾಣ
ದಿಂದ ಧಾನ್ಯವು ಸುರಿದಂತೆ ಮನ್ನವು ಸುರಿಯಿತು.
25 ಜನರು ದೇವದೂತರ ಆಹಾರವನ್ನು ತಿಂದರು. ಅವ
ರನ್ನು ತೃಪ್ತಿಗೊಳಿಸುವುದಕ್ಕಾಗಿ ಆತನು ಆಹಾರವನ್ನು
ಹೇರಳವಾಗಿ ಒದಗಿಸಿದನು.
26 ಬಳಿಕ ಯೆಹೋವನು ಪೂರ್ವದಿಂದ ಬಲವಾದ ಗಾಳಿ
ಬೀಸುವಂತೆ ಮಾಡಿದನು. ಆಗ ಲಾವಕ್ಕಿಗಳು ಮಳೆ
ಯಂತೆ ಅವರಿದ್ದಲ್ಲಿಗೆ ಬಂದು ಬಿದ್ದವು.
27 ಆತನು ತೇಮಾನಿನಿಂದ ಗಾಳಿಬೀಸುವಂತೆ ಮಾಡಿ
ದಾಗ ಪಕ್ಷಿಗಳು ಅಸಂಖ್ಯಾತವಾಗಿದ್ದರಿಂದ ನೀಲಿಯಾ
ಕಾಶವು ಕತ್ತಲೆಯಾಯಿತು.
28 ಪಕ್ಷಿಗಳು ಪಾಳೆಯದ ಮಧ್ಯಭಾಗದಲ್ಲಿ, ಆ ಜನರ
ಗುಡಾರಗಳ ಸುತ್ತಲೆಲ್ಲಾ ಬಿದ್ದವು.
29 ಅವರಿಗೆ ತಿನ್ನಲು ಹೇರಳವಾಗಿತ್ತು. ಆದರೆ ತಮ್ಮ
ಆಸೆಗಳೇ ತಮ್ಮನ್ನು ಪಾಪಕ್ಕೆ ನಡೆಸುವಂತೆ ಅವರು
ಮಾಡಿದರು .
30 ಅವರು ತಮ್ಮ ಆಸೆಗಳನ್ನು ತಮ್ಮ ಹತೋಟಿಯಲ್ಲಿಟ್ಟು
ಕೊಳ್ಳಲಿಲ್ಲ. ಆ ಲಾವಕ್ಕಿಗಳ ರಕ್ತವನ್ನು ಪೂರ್ತಿಯಾಗಿ
ತೆಗೆಯುವ ಮೊದಲೇ ಅವುಗಳ ಮಾಂಸವನ್ನು ತಿಂದು
ಬಿಟ್ಟರು.
31 ಆಗ ಆತನು ಅವರ ಮೇಲೆ ಬಹು ಕೋಪಗೊಂಡು,
ಅವರಲ್ಲಿ ಅನೇಕರನ್ನು ಕೊಂದುಹಾಕಿದನು. ದೃಢ
ಕಾಯರಾಗಿದ್ದ ಆನೇಕ ಯುವಕರಿಗೆ ಆತನು ಸಾವನ್ನು
ಬರಮಾಡಿದನು.
32 ಆದರೂ ಅವರು ಪಾಪ ಮಾಡುತ್ತಾ ಬಂದರು. ಆತನ
ಅದ್ಭುತಕಾರ್ಯಗಳನ್ನು ಅವರು ನಂಬದೆಹೋದರು.
33 ಆದ್ದರಿಂದ ಆತನು ಆಪತ್ತುಗಳನ್ನು ಬರಮಾಡಿ ಅವರ
ಅಯೋಗ್ಯ ಜೀವಿತಗಳನ್ನು ಉಸಿರಿನಂತೆ ಅಂತ್ಯ
ಗೊಳಿಸಿದನು.
34 ಅವರಲ್ಲಿ ಕೆಲವರನ್ನು ದೇವರು ಕೊಂದಾಗಲೆಲ್ಲಾ,
ಉಳಿದವರು ಆತನ ಕಡೆಗೆ ತಿರುಗಿಕೊಂಡು ಓಡಿ
ಬರುತ್ತಿದ್ದರು.
35 ದೇವರೇ ತಮ್ಮ ಆಶ್ರಯಸ್ಥಾನವೆಂಬುದನ್ನೂ
ಮಹೋನ್ನತನಾದ ದೇವರೇ ತಮ್ಮ ರಕ್ಷಕ
ನೆಂಬುದನ್ನೂ ಅವರು ಜ್ಞಾಪಿಸಿಕೊಳ್ಳುತ್ತಿದ್ದರು.
36 ಆದರೆ ಅವರು ಯಥಾರ್ಥವಾಗಿರದೆ ಸುಳ್ಳಾಡಿದರು.
37 ಅವರ ಹೃದಯಗಳು ಆತನಲ್ಲಿ ನಲೆಗೊಂಡಿರಲಿಲ್ಲ.
ಆತನ ಒಡಂಬಡಿಕೆಗೆ ನಂಬಿಗಸ್ತರಾಗಿರಲಿಲ್ಲ.
38 ಆದರೆ ಆತನು ಅವರಿಗೆ ಕರುಣೆ ತೋರಿ ಅವರ ಪಾಪ
ಗಳನ್ನು ಕ್ಷಮಿಸಿದನು. ಆತನು ಅವರನ್ನು ನಾಶ
ಮಾಡಲಿಲ್ಲ. ಅನೇಕ ಸಲ ಆತನು ತನ್ನ ಕೋಪವನ್ನು
ತಡೆಯುತ್ತಾ ಬಂದನು; ತಾನು ಬಹು ಕೋಪ
ಗೊಳ್ಳದಂತೆ ನೋಡಿಕೊಂಡನು.
39 ಅವರು ಕೇವಲ ಮನುಷ್ಯರೆಂಬುದನ್ನು ಆತನು
ಜ್ಞಾಪಿಸಿಕೊಂಡನು. ಜನರಾದರೋ ಬೀಸಿದ ನಂತರ
ಹಿಂತಿರುಗಿ ಬಾರದ ಗಾಳಿಯಂತಿದ್ದಾರೆ.
40 ಅಯ್ಯೋ, ಅವರು ಅರಣ್ಯದಲ್ಲಿ ಆತನಿಗೆ ವಿರುದ್ಧವಾಗಿ
ಅನೇಕಸಲ ದಂಗೆ ಎದ್ದರು. ಆತನನ್ನು ಬಹಳವಾಗಿ
ನೋಯಿಸಿದರು.
41 ಪದೇಪದೇ ಅವರು ಆತನ ತಾಳ್ಮೆಯನ್ನು ಪರೀಕ್ಷಿ
ಸಿದರು. ಅವರು ಇಸ್ರೇಲರ ಪರಿಶುದ್ಧನನ್ನು ಬಹಳ
ವಾಗಿ ನೋಯಿಸಿದರು.
42 ಅವರು ಆತನ ಶಕ್ತಿಯನ್ನು ಮರೆತುಬಿಟ್ಟರು. ಅನೇಕ
ಸಲ ಆತನು ತಮ್ಮನ್ನು ಶತ್ರುಗಳಿಂದ ರಕ್ಷಿಸಿದ್ದನ್ನು
ಅವರು ಮರೆತುಬಿಟ್ಟರು.
43 ಈಜಿಪ್ಟಿನಲ್ಲಿಯೂ ಸೋನ್ ಬಯಲುಗಳಲ್ಲಿಯೂ
ಮಾಡಿದ ಅದ್ಭುತಕಾರ್ಯಗಳನ್ನು ಅವರು ಮರೆತು
ಬಿಟ್ಟರು.
44 ಆತನು ನದಿಗಳನ್ನು ರಕ್ತವನ್ನಾಗಿ ಪರಿವರ್ತಿಸಿದನು!
ಈಜಿಪ್ಟಿನವರಿಗೆ ನೀರನ್ನು ಕುಡಿಯಲಾಗಲಿಲ್ಲ.
45 ಆತನು ಹಿಂಡುಹಿಂಡು ಹುಳಗಳನ್ನು ಕಳುಹಿಸಿದನು;
ಅವು ಈಜಿಪ್ಟಿನ ಜನರನ್ನು ಕಚ್ಚಿದವು. ಆತನು ಕಪ್ಪೆ
ಗಳನ್ನು ಕಳುಹಿಸಿದನು; ಅವು ಈಜಿಪ್ಟಿನವರ ಜೀವಿತ
ಗಳನ್ನು ಹಾಳು ಮಾಡಿದವು.
46 ಆತನು ಅವರ ಬೆಳೆಗಳನ್ನು ಜಿಟ್ಟೆಹುಳಗಳಿಗೂ ಇತರ
ಗಿಡಗಳನ್ನು ಮಿಡತೆಗಳಿಗೂ ಕೊಟ್ಟನು.
47 ಈಜಿಪ್ಟ್ ಜನರ ದ್ರಾಕ್ಷಾಲತೆಗಳನ್ನು ನಾಶಮಾಡಲು
ಆತನು ಆಲಿಕಲ್ಲು ಮಳೆಸುರಿಸಿದನು; ಅವರ ಮರ
ಗಳನ್ನು ನಾಶಮಾಡಲು ಮಂಜುಮಳೆಯನ್ನು
ಸುರಿಸಿದನು.
48 ಆತನು ಅವರ ಪ್ರಾಣಿಗಳನ್ನು ಆಲಿಕಲ್ಲಿನಿಂದಲೂ
ಅವರ ದನಕರುಗಳನ್ನು ಸಿಡಿಲಿನಿಂದಲೂ ಕೊಂದು
ಹಾಕಿದನು.
49 ಆತನು ಈಜಿಪ್ಟ್ ಜನರಿಗೆ ತನ್ನ ಭಯಂಕರವಾದ
ಕೋಪವನ್ನು ತೋರಿದನು. ಆತನು ತನ್ನ ಸಂಹಾರ
ದೂತನನ್ನು ಅವರಿಗೆ ವಿರೋಧವಾಗಿ ಕಳುಹಿಸಿದನು.
50 ಆತನು ತನ್ನ ಕೋಪವನ್ನು ತೋರಿಸಿದನು. ಅವರಲ್ಲಿ
ಯಾರೂ ಬದುಕದಂತೆ ಆತನು ಮಾಡಿದನು. ಮರಣ
ಕರವಾದ ರೋಗದಿಂದ ಅವರಿಗೆ ಸಾವನ್ನು ಬರ
ಮಾಡಿದನು.
51 ಈಜಿಪ್ಟಿನವರ ಎಲ್ಲಾ ಚೊಚ್ಚಲು ಗಂಡುಮಕ್ಕಳನ್ನು
ಆತನು ಕೊಂದುಹಾಕಿದನು. ಹಾಮನ* ಕುಲಕ್ಕೆ
ಸೇರಿದ ಪ್ರತಿಯೊಬ್ಬ ಚೊಚ್ಚಲ ಮಗನನ್ನು ಆತನು
ಕೊಂದುಹಾಕಿದನು.

**ಹಾಮ** ಈಜಿಪ್ಟಿನವರು ಹಾಮನ ಸಂತತಿಯವರು. ಆದಿಕಾಂಡ 10:6-10ನ್ನು ನೋಡಿರಿ.

52 ಬಳಿಕ ಆತನು ಕುರುಬನಂತೆ ಇಸ್ರೇಲನ್ನು ನಡೆಸಿದನು.
ಆತನು ತನ್ನ ಜನರನ್ನು ಕುರಿಗಳಂತೆ ಅರಣ್ಯದಲ್ಲಿ
ನಡೆಸಿದನು.
53 ಆತನು ಅವರಿಗೆ ಮಾರ್ಗದರ್ಶನ ಮಾಡುತ್ತಾ ಸುರಕ್ಷಿತ
ವಾಗಿ ಮುನ್ನಡೆಸಿದನು. ಆತನ ಜನರು ಯಾವುದಕ್ಕೂ
ಭಯಪಡುವ ಅಗತ್ಯವಿರಲಿಲ್ಲ. ಅವರ ಶತ್ರುಗಳನ್ನು
ಆತನು ಕೆಂಪು ಸಮುದ್ರದಲ್ಲಿ ಮುಳುಗಿಸಿದನು.
54 ಆತನು ತನ್ನ ಜನರನ್ನು ತನ್ನ ಪವಿತ್ರನಾಡಿಗೂ ತನ್ನ
ಭುಜಬಲದಿಂದ ತೆಗೆದುಕೊಂಡ ಪರ್ವತಕ್ಕೂ
ನಡೆಸಿದನು.
55 ಆ ನಾಡಿನ ಜನಾಂಗಗಳನ್ನು ಆತನು ಬಲವಂತವಾಗಿ
ಹೊರಗಟ್ಟಿದನು. ಆತನು ಇಸ್ರೇಲಿನ ಪ್ರತಿಯೊಂದು
ಕುಲಕ್ಕೂ ಆ ನಾಡಿನಲ್ಲಿ ಪಾಲು ಕೊಟ್ಟನು; ಆ ನಾಡಿನ
ಮನೆಗಳಲ್ಲಿ ಅವರನ್ನು ನೆಲೆಗೊಳಿಸಿದನು.
56 ಆದರೆ ಇಸ್ರೇಲರು ಮಹೋನ್ನತನಾದ ದೇವರನ್ನು
ಪರೀಕ್ಷಿಸಿ ಆತನನ್ನು ಬಹಳವಾಗಿ ನೋಯಿಸಿದರು.
ಅವರು ಆತನ ಆಜ್ಞೆಗಳಿಗೆ ವಿಧೇಯರಾಗಲಿಲ್ಲ.
57 ಇಸ್ರೇಲರು ಆತನಿಗೆ ವಿಮುಖರಾದರು; ತಮ್ಮ ಪೂರ್ವಿ
ಕರಂತೆಯೇ ಆತನಿಗೆ ವಿರೋಧವಾಗಿ ತಿರುಗಿದರು.
ತಿರುಗುಬಾಣದಂತೆ ತಮ್ಮ ದಿಕ್ಕನ್ನು ಬದಲಾಯಿಸಿ
ಕೊಂಡರು.
58 ಇಸ್ರೇಲರು ಎತ್ತರವಾದ ಸ್ಥಳಗಳನ್ನು* ನಿರ್ಮಿಸಿ,
ಆತನನ್ನು ಕೋಪಗೊಳಿಸಿದರು. ಸುಳ್ಳುದೇವರುಗಳ
ವಿಗ್ರಹಗಳನ್ನು ರೂಪಿಸಿ ಅತನನ್ನು ರೇಗಿಸಿದರು.
59 ದೇವರು ಇದನ್ನು ತಿಳಿದು ಬಹು ಕೋಪಗೊಂಡನು,
ಆತನು ಇಸ್ರೇಲನ್ನು ಸಂಪೂರ್ಣವಾಗಿ ತಿರಸ್ಕರಿಸಿದನು!
60 ಶೀಲೋವಿನಲ್ಲಿದ್ದ ತನ್ನ ಪವಿತ್ರ ಗುಡಾರವನ್ನು ಆತನು
ತೊರೆದುಬಿಟ್ಟನು. ಅವರ ಮಧ್ಯದಲ್ಲಿ ಆತನು ವಾಸ
ಮಾಡಿದ್ದು ಆ ಗುಡಾರದಲ್ಲಿಯೇ.
61 ಆತನು ತನ್ನ ಜನರನ್ನು ಇತರ ಜನಾಂಗಗಳ ವಶಕ್ಕೆ
ಕೊಟ್ಟನು. ಶತ್ರುಗಳು ಆತನ ''ಸುಂದರವಾದ ಆಭರ
ಣವನ್ನು'' ತೆಗೆದುಕೊಂಡರು.
62 ಆತನು ತನ್ನ ಜನರಿಗೆ ವಿರೋಧವಾಗಿ ತನ್ನ ಕೋಪ
ವನ್ನು ತೋರಿದನು. ಯುದ್ಧದಲ್ಲಿ ಅವರಿಗೆ ಮರಣ
ವಾಗುವಂತೆ ಮಾಡಿದನು.
63 ಯುವಕರು ಬೆಂಕಿಯ ಪಾಲಾದರು. ಅವರಿಗೆ ನಿಶ್ಚಿತಾ
ರ್ಥವಾಗಿದ್ದ ಕನ್ಯೆಯರು ವಿವಾಹಗೀತೆಯನ್ನು
ಹಾಡಲಿಲ್ಲ.
64 ಯಾಜಕರು ಕೊಲ್ಲಲ್ಪಟ್ಟರು. ಆದರೆ ವಿಧವೆಯರು
ಅವರಿಗಾಗಿ ಗೋಳಾಡಲಿಲ್ಲ.
65 ಕೊನೆಗೆ, ನಿದ್ದೆಯಿಂದ ಎಚ್ಚರಗೊಳ್ಳುತ್ತಿರುವ ಮನುಷ್ಯ
ನಂತೆಯೂ ಅಮಲಿಳಿದು ಎಚ್ಚರಗೊಳ್ಳುತ್ತಿರುವ ಸೈನಿಕ
ನಂತೆಯೂ ನಮ್ಮ ಯೆಹೋವನು ಎದ್ದನು.
66 ಆತನು ತನ್ನ ಶತ್ರುಗಳನ್ನು ಸದೆಬಡಿದು ಸೋಲಿಸಿದನು.
ಆತನು ತನ್ನ ಶತ್ರುಗಳನ್ನು ಸೋಲಿಸಿ ಅವರನ್ನು ನಿತ್ಯ
ನಿಂದೆಗೆ ಗುರಿಮಾಡಿದನು.
67 ಆದರೆ ಆತನು ಯೋಸೇಫನ ಕುಲವನ್ನು ತಿರಸ್ಕರಿ
ಸಿದನು. ಎಫ್ರಾಯೀಮನ ಕುಲವನ್ನೂ ಆತನು ಆರಿಸಿ
ಕೊಳ್ಳಲಿಲ್ಲ.
68 ಆತನು ಯೆಹೂದಕುಲವನ್ನೇ ಆರಿಸಿಕೊಂಡನು
ಆತನು ತನ್ನ ಪ್ರಿಯ ಚೀಯೋನ್ ಪರ್ವತವನ್ನೇ ಆರಿಸಿ
ಕೊಂಡನು.
69 ಆತನು ತನ್ನ ಪವಿತ್ರಾಲಯವನ್ನು ಆ ಪರ್ವತದ ಮೇಲೆ
ಕಟ್ಟಿ ಆದನ್ನು ಭೂಮಿಯಂತೆ ಶಾಶ್ವತಗೊಳಿಸಿದನು.
70 ಆತನು ದಾವೀದನನ್ನು ತನ್ನ ವಿಶೇಷ ಸೇವಕನನ್ನಾಗಿ
ಆರಿಸಿಕೊಂಡನು. ದಾವೀದನು ಕುರಿಹಟ್ಟಿಗಳನ್ನು
ಕಾಯುತ್ತಿದ್ದನು.
71 ಆತನು ದಾವೀದನಿಗೆ ಕುರಿಗಳನ್ನು ಪರಿಪಾಲನೆ
ಮಾಡುವ ಕೆಲಸದಿಂದ ತೆಗೆದುಹಾಕಿ ತನ್ನ ಜನರಾದ
ಯಾಕೋಬ್ಯರನ್ನೂ ತನ್ನ ಆಸ್ತಿಯಾದ ಇಸ್ರೇಲರನ್ನು
ಪರಿಪಾಲಿಸುವ ಉದ್ಯೋಗವನ್ನು ಕೊಟ್ಟನು.
72 ದಾವೀದನು ಶುದ್ಧಹೃದಯದಿಂದಲೂ ಬಹು ವಿವೇಕ
ದಿಂದಲೂ ಇಸ್ರೇಲರನ್ನು ನಡೆಸಿದನು.

## ಕೀರ್ತನೆ 79

*ಸ್ತುತಿಗೀತೆ*

*ರಚನೆಗಾರ: ಆಸಾಫ*

1 ದೇವರೇ, ಅನ್ಯಜನಾಂಗಗಳು ನಿನ್ನ ಜನರಿಗೆ ಮುತ್ತಿಗೆ
ಹಾಕಿದ್ದಾರೆ. ಅವರು ನಿನ್ನ ಪವಿತ್ರಾಲಯವನ್ನು ಹೊಲೆ
ಮಾಡಿದರು; ಜೆರುಸಲೇಮನ್ನು ನಾಶಮಾಡಿದರು.
2 ಅವರು ನಿನ್ನ ಸೇವಕರ ದೇಹಗಳನ್ನು ಕ್ರೂರಪಕ್ಷಿಗಳಿಗೆ
ಆಹಾರಮಾಡಿದರು. ಅವರು ನಿನ್ನ ಭಕ್ತರ ದೇಹ
ಗಳನ್ನು ಕ್ರೂರ ಪ್ರಾಣಿಗಳಿಗೆ ಹಾಕಿದರು.
3 ರಕ್ತವು ನೀರಿನಂತೆ ಹರಿಯುವ ತನಕ ಶತ್ರುಗಳು ನಿನ್ನ
ಜನರನ್ನು ಕೊಂದುಹಾಕಿದರು. ಶವಗಳನ್ನು ಹೂಳಲು
ಯಾರು ಉಳಿದಿಲ್ಲ.
4 ನಮ್ಮ ನೆರೆಹೊರೆಯ ದೇಶಗಳವರು ನಮಗೆ ಅವ
ಮಾನ ಮಾಡಿದರು. ನಮ್ಮ ಸುತ್ತಮುತ್ತಲಿನ ಜನರೆ
ಲ್ಲರೂ ನಮ್ಮನ್ನು ನೋಡಿ ನಗುತ್ತಾ ಗೇಲಿಮಾಡಿದರು.
5 ದೇವರೇ, ಇನ್ನೆಷ್ಟರವರೆಗೆ ನೀನು ನಮ್ಮ ಮೇಲೆ
ಕೋಪದಿಂದಿರುವೆ? ನಿನ್ನ ಕೋಪಾಗ್ನಿಯು ಉರಿ
ಯುತ್ತಲೇ ಇರಬೇಕೇ?

---

**ಎತ್ತರವಾದ ಸ್ಥಳಗಳು** ದೇವರನ್ನು ಅಥವಾ ಸುಳ್ಳುದೇವರುಗಳನ್ನು ಆರಾಧಿಸುತ್ತಿದ್ದ ಸ್ಥಳ, ಸಾಮಾನ್ಯವಾಗಿ ಈ ಸ್ಥಳಗಳು ಬೆಟ್ಟಗುಡ್ಡಗಳ ಮೇಲಿರುತ್ತಿದ್ದವು.

6 ನಿನ್ನನ್ನು ಅರಿಯದ ಜನಾಂಗಗಳ ಮೇಲೆಯೂ ನಿನ್ನ ಹೆಸರನ್ನು ಆರಾಧಿಸದ ಜನಾಂಗಗಳ ಮೇಲೆಯೂ ನಿನ್ನ ರೌದ್ರವನ್ನು ಸುರಿದುಬಿಡು.
7 ಯಾಕಂದರೆ ಆ ಜನಾಂಗಗಳು ಯಾಕೋಬ್ಯರನ್ನೂ ಅವರ ದೇಶವನ್ನೂ ನಾಶಮಾಡಿದರು.
8 ನಮ್ಮ ಪೂರ್ವಿಕರು ಮಾಡಿದ ಪಾಪಕ್ಕೆ ಬರಬೇಕಾದ ದಂಡನೆಯನ್ನು ನಮ್ಮ ಮೇಲೆ ಬರಗೊಡಿಸಬೇಡ. ಬೇಗನೆ ನಿನ್ನ ಕರುಣೆಯನ್ನು ನಮಗೆ ತೋರು! ನೀನು ನಮಗೆ ಎಷ್ಟೋ ಅಗತ್ಯವಾಗಿರುವೆ!
9 ನಮ್ಮ ರಕ್ಷಕನಾದ ದೇವರೇ, ನಮಗೆ ಸಹಾಯ ಮಾಡು! ನಿನ್ನ ಹೆಸರಿನ ಘನತೆಗಾಗಿ ನಮಗೆ ಸಹಾಯ ಮಾಡು! ನಮ್ಮನ್ನು ರಕ್ಷಿಸಿ ನಿನ್ನ ಹೆಸರಿನ ಘನತೆ ಗೋಸ್ಕರ ನಮ್ಮ ಪಾಪಗಳನ್ನು ಅಳಿಸಿಬಿಡು.
10 ಅನ್ಯಜನಾಂಗಗಳು, ‘‘ನಿಮ್ಮ ದೇವರು ಎಲ್ಲಿ? ಆತನು ನಿಮಗೆ ಸಹಾಯಮಾಡಲಾರನೇ?’’ ಎಂದು ಹೇಳಲು ಅವಕಾಶಕೊಡಬೇಡ. ದೇವರೇ, ಅವರು ನಿನ್ನ ಸೇವಕರನ್ನು ಕೊಂದದ್ದಕ್ಕಾಗಿ ನಮ್ಮ ಕಣ್ಣೆದುರಿನಲ್ಲಿಯೇ ಅವರನ್ನು ದಂಡಿಸು.
11 ದಯವಿಟ್ಟು, ಸೆರೆಯಾಳುಗಳ ಗೋಳಾಟಕ್ಕೆ ಕಿವಿಗೊಡು! ಸಾಯಲಿರುವವರನ್ನು ನಿನ್ನ ಮಹಾಶಕ್ತಿಯಿಂದ ಕಾಪಾಡು.
12 ಒಡೆಯನೇ, ನಮ್ಮ ಸುತ್ತಮುತ್ತಲಿನ ಜನರು ಮಾಡಿದ ಕಾರ್ಯಗಳಿಗಾಗಿ ಅವರನ್ನು ಏಳರಷ್ಟು ದಂಡಿಸು. ನಿನಗೆ ಅವಮಾನಮಾಡಿದ್ದರಿಂದ ಅವರನ್ನು ದಂಡಿಸು.
13 ನಾವು ನಿನ್ನ ಜನರೂ ನೀನು ಪಾಲಿಸುವ ಮಂದೆಯೂ ಆಗಿದ್ದೇವೆ. ನಾವು ನಿನ್ನನ್ನು ಎಂದೆಂದಿಗೂ ಕೊಂಡಾಡುವೆವು. ನಿನ್ನನ್ನು ಸದಾಕಾಲ ಸ್ತುತಿಸುವೆವು.

## ಕೀರ್ತನೆ 80

*ಸ್ತುತಿಗೀತೆ*

*ರಚನೆಗಾರ: ಆಸಾಫ*

1 ಇಸ್ರೇಲನ್ನು ಕಾಯುವ ಕುರುಬನೇ, ಯೋಸೇಫನ ಜನರನ್ನು ಕುರಿಮಂದೆಯಂತೆ ನಡೆಸುವಾತನೇ, ಕೆರೂಬಿ ದೂತರ ಮೇಲೆ ರಾಜನಂತೆ ಕುಳಿತಿರುವಾತನೇ, ಕಿವಿಗೊಡು. ನಾವು ನಿನ್ನನ್ನು ನೋಡುವಂತಾಗಲಿ.
2 ಇಸ್ರೇಲನ್ನು ಕಾಯುವ ಕುರುಬನೇ, ನಿನ್ನ ಮಹತ್ವವನ್ನು ಎಫ್ರಾಯೀಮನಿಗೂ ಬೆನ್ಯಾಮೀನನಿಗೂ ಮನಸ್ಸೆಗೂ ತೋರಿಸು. ಬಂದು ನಮ್ಮನ್ನು ರಕ್ಷಿಸು.
3 ದೇವರೇ, ನಮ್ಮನ್ನು ಮತ್ತೆ ಸ್ವೀಕರಿಸು. ನಮ್ಮನ್ನು ರಕ್ಷಿಸು! ನಮ್ಮನ್ನು ಸ್ವೀಕರಿಸು!
4 ಸರ್ವಶಕ್ತನಾದ ಯೆಹೋವನೇ, ಇನ್ನೆಷ್ಟರವರೆಗೆ ನಮ್ಮ ಮೇಲೆ ಕೋಪದಿಂದಿರುವೆ? ನಮ್ಮ ಪ್ರಾರ್ಥನೆಗಳಿಗೆ ಯಾವಾಗ ಕಿವಿಗೊಡುವೆ?
5 ನಿನ್ನ ಜನರಿಗೆ ಕಣ್ಣೀರನ್ನು ಆಹಾರವನ್ನಾಗಿ ಮಾಡಿರುವೆ. ನಿನ್ನ ಜನರಿಗೆ ಕಣ್ಣೀರು ತುಂಬಿರುವ ಪಾತ್ರೆಗಳನ್ನು ಕೊಟ್ಟಿರುವೆ. ಕಣ್ಣೀರೇ ಅವರಿಗೆ ಕುಡಿಯುವ ನೀರಾಗಿದೆ.
6 ಸುತ್ತಲಿನ ಜನಾಂಗಗಳಿಗೆ ನಮ್ಮನ್ನು ಯುದ್ಧಕ್ಕೆ ಕಾರಣವನ್ನಾಗಿ ಮಾಡಿರುವೆ. ಶತ್ರುಗಳು ನಮ್ಮನ್ನು ನೋಡಿ ನಗುವರು.
7 ಸರ್ವಶಕ್ತನಾದ ದೇವರೇ, ನಮ್ಮನ್ನು ಮತ್ತೆ ಸ್ವೀಕರಿಸು. ನಮ್ಮನ್ನು ಸ್ವೀಕರಿಸು. ನಮ್ಮನ್ನು ರಕ್ಷಿಸು.
8 ಹಿಂದಿನ ಕಾಲದಲ್ಲಿ ನೀನು ನಮ್ಮನ್ನು ಅಮೂಲ್ಯವಾದ ಸಸಿಯಂತೆ ನೋಡಿಕೊಂಡೆ. ನಿನ್ನ ‘‘ದ್ರಾಕ್ಷಾಲತೆ’’ಯನ್ನು ಈಜಿಪ್ಟಿನಿಂದ ತೆಗೆದುಕೊಂಡು ಬಂದೆ. ನೀನು ಬೇರೆ ಜನರನ್ನು ಈ ನಾಡಿನಿಂದ ಹೊರಗಟ್ಟಿ ನಿನ್ನ ‘‘ದ್ರಾಕ್ಷಾಲತೆ’’ಯನ್ನು ನೆಟ್ಟೆ.
9 ‘‘ದ್ರಾಕ್ಷಾಲತೆ’’ಯು ಬೆಳೆಯಲೆಂದು ಭೂಮಿಯನ್ನು ಹದಮಾಡಿದೆ. ಅದರ ಬೇರುಗಳು ಬಲವಾಗಿ ಬೆಳೆಯಲು ಸಹಾಯಮಾಡಿದೆ. ಬಹುಬೇಗನೆ ‘‘ದ್ರಾಕ್ಷಾಲತೆ’’ ಯು ದೇಶದಲ್ಲೆಲ್ಲಾ ಹಬ್ಬಿಕೊಂಡಿತು.
10 ಅದರ ನೆರಳಿನಿಂದ ಬೆಟ್ಟಗಳು ಕವಿದುಕೊಂಡವು. ಅದರ ಎಲೆಗಳ ನೆರಳಿನಿಂದ ದೇವದಾರು ವೃಕ್ಷಗಳು ಕವಿದುಕೊಂಡವು.
11 ಅದರ ಬಳ್ಳಿಗಳು ಮೆಡಿಟರೇನಿಯನ್ ಸಮುದ್ರದವರೆಗೂ ಹಬ್ಬಿಕೊಂಡವು. ಅದರ ರೆಂಬೆಗಳು ಯೂಫ್ರೇಟೀಸ್ ನದಿಯವರೆಗೂ ಹಬ್ಬಿಕೊಂಡವು.
12 ನಿನ್ನ ‘‘ದ್ರಾಕ್ಷಾಲತೆ’’ಯ ಸಂರಕ್ಷಣೆಗಾಗಿ ಕಟ್ಟಿದ್ದ ಗೋಡೆಗಳನ್ನು ನೀನು ಕೆಡವಿಬಿಟ್ಟದ್ದೇಕೆ? ಈಗ ಅದರ ಸಮೀಪದಲ್ಲಿ ಹೋಗುವ ಪ್ರತಿಯೊಬ್ಬರೂ ಅದರ ಹಣ್ಣುಗಳನ್ನು ತೆಗೆದುಕೊಳ್ಳುವರು.
13 ಕಾಡುಹಂದಿಗಳು ಬಂದು ನಿನ್ನ ‘‘ದ್ರಾಕ್ಷಾಲತೆ’’ಯ ಮೇಲೆ ನಡೆಯುತ್ತವೆ. ಕಾಡುಪ್ರಾಣಿಗಳು ಬಂದು ಅವುಗಳ ಎಲೆಗಳನ್ನು ತಿನ್ನುತ್ತವೆ.
14 ಸರ್ವಶಕ್ತನಾದ ದೇವರೇ, ಹಿಂತಿರುಗಿ ಬಾ. ಪರಲೋಕದಿಂದ ನಿನ್ನ ‘‘ದ್ರಾಕ್ಷಾಲತೆ’’ಯನ್ನು ನೋಡಿ ಅದನ್ನು ಸಂರಕ್ಷಿಸು.
15 ನಿನ್ನ ಸ್ವಂತ ಕೈಗಳಿಂದ ನೀನು ನೆಟ್ಟ ‘‘ದ್ರಾಕ್ಷಾಲತೆ’’ಯನ್ನು ನೋಡು. ನೀನು ಬೆಳೆಸಿದ ಎಳೆಸಸಿಯನ್ನು* ನೋಡು.
16 ನಿನ್ನ ‘‘ದ್ರಾಕ್ಷಾಲತೆ’’ಯು ಒಣಗಿದ ಗೊಬ್ಬರದಂತೆ ಬೆಂಕಿಯಿಂದ ಸುಟ್ಟುಹೋಗಿದೆ. ನೀನು ಅದರ ಮೇಲೆ ಕೋಪಗೊಂಡು ನಾಶಮಾಡಿದೆ.
17 ನಿನ್ನ ಬಲಗಡೆಯಲ್ಲಿ ನಿಂತಿರುವ ನಿನ್ನ ಮಗನ ಕಡೆಗೆ ಕೈಚಾಚು. ನೀನು ಬೆಳೆಸಿದ ಮಗನ ಕಡೆಗೆ ಕೈಚಾಚು.

---

**ಎಳೆಸಸಿ** ಅಕ್ಷರಶಃ ‘‘ಮಗನು.’’

18 ಅವನು ನಿನ್ನನ್ನು ಮತ್ತೆ ತ್ಯಜಿಸುವುದಿಲ್ಲ. ಅವನು ಬದು
ಕಲಿ, ಆಗ ಅವನು ನಿನ್ನ ಹೆಸರನ್ನು ಆರಾಧಿಸುವನು.
19 ಸರ್ವಶಕ್ತನಾದ ಯೆಹೋವ ದೇವರೇ, ನಮ್ಮ ಬಳಿಗೆ
ಹಿಂತಿರುಗಿ ಬಾ, ನಮ್ಮನ್ನು ಸ್ವೀಕರಿಸು. ನಮ್ಮನ್ನು
ರಕ್ಷಿಸು.

## ಕೀರ್ತನೆ 81

*ರಚನೆಗಾರ: ಆಸಾಫ*

1 ನಮಗೆ ಬಲಪ್ರದನಾಗಿರುವ ದೇವರಿಗೆ ಸಂತಸದಿಂದ
ಹಾಡಿರಿ. ಇಸ್ರೇಲಿನ ದೇವರಿಗೆ ಆನಂದಘೋಷ
ಮಾಡಿರಿ.
2 ವಾದ್ಯವನ್ನು ನುಡಿಸಲಾರಂಭಿಸಿರಿ; ದಮ್ಮಡಿಯನ್ನು
ಬಡಿಯಿರಿ. ಇಂಪಾದ ಹಾರ್ಪ್ ಮತ್ತು ಲೈರ್ ವಾದ್ಯ
ಗಳನ್ನು ಬಾರಿಸಿರಿ.
3 ಅಮಾವಾಸ್ಯೆಯಲ್ಲಿಯೂ* ನಮ್ಮ ರಜಾಕಾಲವಾದ
ಪೂರ್ಣಿಮೆಯಲ್ಲಿಯೂ ತುತ್ತೂರಿಯನ್ನು ಊದಿರಿ.
4 ಇದು ಇಸ್ರೇಲರಿಗೆ ಕಟ್ಟಳೆಯಾಗಿದೆ. ದೇವರು
ಯಾಕೋಬನಿಗೆ ಈ ಆಜ್ಞೆಯನ್ನು ಕೊಟ್ಟನು.
5 ಆತನು ಯೋಸೇಫನನ್ನು* ಈಜಿಪ್ಟಿನಿಂದ ಬಿಡಿಸಿ
ಕೊಂಡು ಬಂದಾಗ ಅವನೊಂದಿಗೆ ಈ ಒಡಂಬಡಿಕೆ
ಯನ್ನು ಮಾಡಿಕೊಂಡನು. ಈಜಿಪ್ಟಿನಲ್ಲಿ ನಾವು
ಕೇಳಿದ್ದು ನಮಗೆ ಅರ್ಥವಾಗದ ಭಾಷೆಯನ್ನೇ!
6 ಆತನು ಇಂತೆನ್ನುತ್ತಾನೆ: ''ನಿಮ್ಮ ಹೆಗಲಿನಿಂದ ಹೊರೆ
ಯನ್ನು ತೆಗೆದುಹಾಕಿದೆನು. ಕೆಲಸಗಾರರ ಬುಟ್ಟಿ
ಯನ್ನು ನೀವು ಬಿಸಾಕುವಂತೆ ಮಾಡಿದೆನು.
7 ನೀವು ಆಪತ್ತಿನಲ್ಲಿದ್ದಾಗ ಸಹಾಯಕ್ಕಾಗಿ ಮೊರೆ
ಯಿಟ್ಟಿರಿ. ಆಗ ನಾನು ನಿಮ್ಮನ್ನು ಬಿಡಿಸಿದೆನು. ನಾನು
ಕಾರ್ಮೋಡದಲ್ಲಿ ಮರೆಯಾಗಿದ್ದರೂ ನಿಮಗೆ
ಉತ್ತರಿಸಿದೆನು. ನಾನು ನಿಮ್ಮನ್ನು ಮೆರೀಬಾದ ನೀರಿ
ನಿಂದ ಪರೀಕ್ಷಿಸಿದೆನು.''
8 ''ನನ್ನ ಜನರೇ, ನನಗೆ ಕಿವಿಗೊಡಿರಿ, ನಾನು ನಿಮಗೆ
ಒಡಂಬಡಿಕೆಯನ್ನು ಕೊಡುತ್ತಿರುವೆ. ಇಸ್ರೇಲೇ,
ದಯವಿಟ್ಟು ಕಿವಿಗೊಡು!
9 ಪರದೇಶದವರು ಆರಾಧಿಸುವ ಯಾವ ಸುಳ್ಳು
ದೇವರುಗಳನ್ನೂ ಪೂಜಿಸಬೇಡ.
10 ಯೆಹೋವನಾದ ನಾನೇ ನಿನ್ನ ದೇವರು. ನಿನ್ನನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದ ದೇವರು
ನಾನೇ. ಇಸ್ರೇಲೇ, ನಿನ್ನ ಬಾಯನ್ನು ತೆರೆ, ಆಗ ನಾನು
ನಿನಗೆ ತಿನ್ನಿಸುವೆನು.
11 ''ಆದರೆ ನನ್ನ ಜನರು ನನಗೆ ಕಿವಿಗೊಡಲಿಲ್ಲ.
ಇಸ್ರೇಲರು ನನಗೆ ವಿಧೇಯರಾಗಲಿಲ್ಲ.
12 ಆದ್ದರಿಂದ ತಮ್ಮ ಇಷ್ಟಾನುಸಾರ ಮಾಡಲೆಂದು ಅವ
ರನ್ನು ಬಿಟ್ಟುಕೊಟ್ಟೆ. ಇಸ್ರೇಲ್ ತನ್ನ ಇಷ್ಟಾನುಸಾರ
ಮಾಡಿತು.
13 ನನ್ನ ಜನರು ನನಗೆ ಕಿವಿಗೊಟ್ಟು ನನ್ನ ಚಿತ್ತಾನು
ಸಾರವಾಗಿ ಜೀವಿಸಿದರೆ
14 ಅವರ ಶತ್ರುಗಳನ್ನು ಸೋಲಿಸುವೆನು; ಇಸ್ರೇಲಿಗೆ
ಕೇಡು ಮಾಡುವವರನ್ನು ದಂಡಿಸುವೆನು.''
15 ಯೆಹೋವನ ಶತ್ರುಗಳು ಭಯದಿಂದ ನಡುಗುವರು.
ಅವರು ಶಾಶ್ವತವಾಗಿ ದಂಡಿಸಲ್ಪಡುವರು.
16 ದೇವರು ತನ್ನ ಜನರಿಗೆ ಉತ್ತಮವಾದ ಗೋಧಿಯನ್ನು
ಒದಗಿಸುವನು. ಬಂಡೆಯಾಗಿರುವ ಆತನು ತನ್ನ
ಜನರಿಗೆ ಜೇನುತುಪ್ಪವನ್ನು ಸಂತೃಪ್ತಿಯಾಗುವ ತನಕ
ಕೊಡುವನು.

## ಕೀರ್ತನೆ 82

*ಸ್ತುತಿಗೀತೆ ರಚನೆಗಾರ: ಆಸಾಫ*

1 ದೇವಾದಿದೇವನು ತನ್ನ ಸಭೆಯಲ್ಲಿ* ನಿಂತುಕೊಂಡು
ದೇವರುಗಳಿಗೆ ನ್ಯಾಯತೀರ್ಪು ನೀಡುವನು.
2 ದೇವರು ಇಂತೆನ್ನುತ್ತಾನೆ: ಇನ್ನೆಷ್ಟರವರೆಗ ಅನ್ಯಾಯ
ವಾಗಿ ತೀರ್ಪು ಕೊಡುತ್ತೀರಿ? ಇನ್ನೆಷ್ಟರವರೆಗೆ ದುಷ್ಟ
ರನ್ನು ದಂಡಿಸದೆ ಬಿಡುಗಡೆ ಮಾಡುತ್ತೀರಿ?''
3 ''ಅನಾಥರ ಮತ್ತು ಬಡಜನರ ಪರವಾಗಿ ವಾದಿಸಿರಿ.
ಅನ್ಯಾಯಕ್ಕೆ ಒಳಗಾಗಿರುವ ಬಡವರ ಹಕ್ಕುಗಳನ್ನು
ಸಂರಕ್ಷಿಸಿರಿ.
4 ಬಡವರಿಗೆ ಮತ್ತು ಅಸಹಾಯಕರಿಗೆ ಸಹಾಯ
ಮಾಡಿರಿ. ಅವರನ್ನು ದುಷ್ಟರಿಂದ ರಕ್ಷಿಸಿರಿ.
5 ''ಅವರಿಗೆ ಏನೂ ಗೊತ್ತಿಲ್ಲ. ಅವರಿಗೆ ಏನೂ ಅರ್ಥ
ವಾಗುವುದಿಲ್ಲ! ತಾವು ಮಾಡುತ್ತಿರುವುದೂ ಅವರಿಗೆ
ತಿಳಿಯದು. ಅವರ ಪ್ರಪಂಚವು ಅವರ ಸುತ್ತಲೂ
ಕುಸಿದು ಬೀಳುತ್ತಿದೆ!''
6 ನಾಯಕರಾದ ನಿಮಗೆ ನಾನು ಹೇಳುವುದೇನೆಂದರೆ:
''ನೀವು ದೇವರುಗಳು. ನೀವು ಮಹೋನ್ನತನಾದ
ದೇವರ ಪುತ್ರರು.
7 ಆದರೆ ಎಲ್ಲಾ ಜನರಂತೆ ನೀವೂ ಸಾಯುವಿರಿ.
ಬೇರೆಲ್ಲಾ ನಾಯಕರುಗಳಂತೆಯೇ ನೀವು
ಸಾಯುವಿರಿ.''

---

**ಅಮವಾಸ್ಯೆ** ಇದು ಹೀಬ್ರೂ ತಿಂಗಳ ಮೊದಲನೆ ದಿನವಾಗಿತ್ತು. ಈ ದಿನಗಳಲ್ಲಿ ದೇವರನ್ನು ಆರಾಧಿಸುವುದಕ್ಕಾಗಿ ವಿಶೇಷ ಕೂಟಗಳನ್ನು ನಡೆಸಲಾಗುತ್ತಿತ್ತು.

**ಯೋಸೇಫ್** ಇಲ್ಲಿ ಇದರ ಅರ್ಥ: ಯೋಸೇಫನ ಕುಟುಂಬ, ಇಸ್ರೇಲಿನ ಜನರು.

**ದೇವಾದಿದೇವನು ತನ್ನ ಸಭೆಯಲ್ಲಿ** ಇಲ್ಲಿ ಇದರರ್ಥ, ಇಸ್ರೇಲ್ ನಾಯಕರುಗಳ ಸಭೆಯಲ್ಲಿ ಎಂದಿರಬಹುದು. ಅನೇಕಸಲ, ನಾಯಕರನ್ನು ಮತ್ತು ರಾಜರುಗಳನ್ನು ದೇವರುಗಳೆಂದು ಕರೆಯಲಾಗಿದೆ.

8 ದೇವರೇ ಎದ್ದೇಳು! ನೀನೇ ನ್ಯಾಯಾಧೀಶನಾಗಿರು!
ಎಲ್ಲಾ ಜನಾಂಗಗಳಿಗೆ ನೀನೇ ನಾಯಕನಾಗಿರು!

## ಕೀರ್ತನೆ 83

*ಸ್ತುತಿಗೀತೆ*

*ರಚನೆಗಾರ: ಆಸಾಫ*

1 ದೇವರೇ, ಸುಮ್ಮನಿರಬೇಡ! ನಿನ್ನ ಕಣ್ಣುಗಳನ್ನು
ಮುಚ್ಚಿಕೊಳ್ಳಬೇಡ. ದೇವರೇ, ದಯವಿಟ್ಟು
ಮಾತನಾಡು.
2 ದೇವರೇ, ನಿನ್ನ ಶತ್ರುಗಳು ನಿನಗೆ ವಿರೋಧವಾಗಿ
ಸಂಚುಮಾಡುತ್ತಿದ್ದಾರೆ. ಬಹುಬೇಗನೆ ಅವರು
ಆಕ್ರಮಣ ಮಾಡಲಿದ್ದಾರೆ.
3 ನಿನ್ನ ಜನರಿಗೆ ವಿರೋಧವಾಗಿ ರಹಸ್ಯ ಯೋಜನೆ
ಗಳನ್ನು ಮಾಡುತ್ತಿದ್ದಾರೆ. ನಿನ್ನ ಪ್ರಿಯರ ವಿರೋಧ
ವಾಗಿ ಅವರು ಸಂಚು ಮಾಡುತ್ತಿದ್ದಾರೆ.
4 ಅವರು ಹೀಗೆಂದುಕೊಳ್ಳುತ್ತಿದ್ದಾರೆ: ‘‘ಬನ್ನಿರಿ,
ಅವರನ್ನು ಸಂಪೂರ್ಣವಾಗಿ ನಾಶಮಾಡೋಣ. ಆಗ
‘‘ಇಸ್ರೇಲ್ ’’ಎಂಬ ಹೆಸರೇ ಅಳಿದು
ಹೋಗುವುದು.‘‘
5 ನಿನಗೂ ನೀನು ನಮ್ಮೊಂದಿಗೆ ಮಾಡಿಕೊಂಡ
ಒಪ್ಪಂದಕ್ಕೂ ವಿರೋಧವಾಗಿ ಅವರೆಲ್ಲರೂ ಒಂದು
ಗೂಡಿದ್ದಾರೆ.
6-7 ಅವರು ಯಾರೆಂದರೆ: ಎದೋಮ್ಯರು, ಇಷ್ಮಾಯೇ
ಲ್ಯರು, ಮೋವಾಬ್ಯರು ಮತ್ತು ಹಗ್ರೀಯ ಸಂತತಿ
ಯವರು, ಗೆಬಾಲ್ಯರು ಅಮ್ಮೋನಿಯರು, ಅಮಾಲೇ
ಕ್ಯರು, ಫಿಲಿಷ್ಟಿಯರು ಮತ್ತು ತೂರ್ ಸಂಸ್ಥಾನದ
ವರು. ಇವರೆಲ್ಲರೂ ನಮಗೆ ವಿರೋಧವಾಗಿ ಸೇರಿ
ಬಂದಿದ್ದಾರೆ.
8 ಅಶೂರ್ಯದವರು ಸಹ ಅವರೊಡನೆ ಸೇರಿಕೊಂಡು
ಲೋಟನ ಸಂತತಿಯವರನ್ನು ಪ್ರಬಲರನ್ನಾಗಿ
ಮಾಡಿದ್ದಾರೆ.
9 ನೀನು ಮಿದ್ಯಾನ್ಯರನ್ನೂ ಕೀಷೋನ್ ನದಿಯ
ಸಮೀಪದಲ್ಲಿ ಸೀಸೆರನನ್ನೂ ಯಾಬೀನನನ್ನೂ
ಸೋಲಿಸಿದಂತೆ ಅವರನ್ನು ಸೋಲಿಸು.
10 ನೀನು ಅವರನ್ನು ಎಂದೋರಿನಲ್ಲಿ ಸೋಲಿಸಿದೆ. ಅವರ
ದೇಹಗಳು ನೆಲದ ಮೇಲೆ ಕೊಳೆತುಹೋದವು.
11 ದೇವರೇ, ಶತ್ರುಗಳ ನಾಯಕರುಗಳನ್ನು ಸೋಲಿಸು.
ನೀನು ಓರೇಬ್ ಮತ್ತು ಜೇಬ್ ಪ್ರಾಂತ್ಯಗಳಿಗೆ ಮಾಡಿ
ದಂತೆಯೇ ಅವರಿಗೆ ಮಾಡು. ನೀನು ಜೇಬಹ ಮತ್ತು
ಚೆಲ್ಮುನ್ನ ಪ್ರಾಂತ್ಯಗಳಿಗೆ ಮಾಡಿದಂತೆಯೇ ಅವರಿಗೆ
ಮಾಡು.
12 ದೇವರೇ, ಅವರು ನಿನ್ನ ನಾಡಿನಿಂದ ನಮ್ಮನ್ನು ಹೊರ
ಗಟ್ಟಬೇಕೆಂದಿದ್ದರು.
13 ಗಾಳಿಗೆ ತೂರಿಹೋಗುವ ಮೊಟಕುಬೇರಿನ ಕಳೆ
ಯಂತೆ ಅವರನ್ನು ಮಾಡು. ಗಾಳಿಯು ಹೊಟ್ಟನ್ನು
ಚದರಿಸುವಂತೆ ಅವರನ್ನು ಚದರಿಸು.
14 ಕಾಡನ್ನು ನಾಶಮಾಡುವ ಬೆಂಕಿಯಂತೆಯೂ ಬೆಟ್ಟ
ಗಳನ್ನು ಸುಟ್ಟುಹಾಕುವ ಕಾಳ್ಗಿಚ್ಚಿನಂತೆಯೂ ಅವರನ್ನು
ನಾಶಮಾಡು.
15 ಬಿರುಗಾಳಿಯಿಂದ ಕೊಚ್ಚಿಕೊಂಡು ಹೋಗುವ
ಧೂಳಿನಂತೆ ಅವರನ್ನು ಬೆನ್ನಟ್ಟಿಹೋಗು. ಸುಂಟರ
ಗಾಳಿಯಂತೆ ಅವರನ್ನು ನಡುಗಿಸು.
16 ಯೆಹೋವನೇ, ತಾವು ನಿಜವಾಗಿಯೂ ಬಲಹೀನ
ರೆಂಬುದನ್ನು ಅವರು ಕಲಿತುಕೊಳ್ಳುವಂತೆ ಮಾಡು;
ಆಗ ಅವರು ನಿನ್ನ ಹೆಸರನ್ನು ಆರಾಧಿಸಬೇಕೆನ್ನುವರು.
17 ಅವರನ್ನು ಭಯವೂ ನಾಚಿಕೆಯೂ ಕವಿದುಕೊಂಡೇ
ಇರಲಿ. ಅವರು ಅವಮಾನಗೊಂಡು ನಾಶವಾಗಲಿ.
18 ಆಗ ಅವರು ನೀನೊಬ್ಬನೇ ದೇವರೆಂದೂ ನಿನ್ನ ಹೆಸರು
ಯೆಹೋವನೆಂದೂ ತಿಳಿದುಕೊಳ್ಳುವರು.
ಭೂಲೋಕಕ್ಕೆಲ್ಲಾ ಮಹೋನ್ನತನಾದ ದೇವ
ರೊಬ್ಬನೇ ದೇವರೆಂದು ಅವರು ಅರಿತುಕೊಳ್ಳುವರು.

## ಕೀರ್ತನೆ 84

*ರಚನೆಗಾರರು : ಕೋರಹೀಯರು*

1 ಸರ್ವಶಕ್ತನಾದ ಯೆಹೋವನೇ, ನಿನ್ನ ಆಲಯವು
ಎಷ್ಟೋ ರಮ್ಯವಾಗಿದೆ.
2 ಯೆಹೋವನೇ, ನಿನ್ನ ಆಲಯದೊಳಗೆ ಪ್ರವೇಶಿಸಲು
ಕಾತುರಗೊಂಡಿರುವೆ. ನನ್ನ ಅಂಗಾಂಗಗಳೆಲ್ಲಾ ಜೀವ
ಸ್ವರೂಪನಾದ ದೇವರೊಂದಿಗೆ ಇರಲು
ಬಯಸುತ್ತಿವೆ.
3 ಸರ್ವಶಕ್ತನಾದ ಯೆಹೋವನೇ, ನನ್ನ ರಾಜನೇ, ನನ್ನ
ದೇವರೇ, ಗುಬ್ಬಚ್ಚಿಗಳಿಗೂ ಪಾರಿವಾಳಗಳಿಗೂ ನಿನ್ನ
ಆಲಯದಲ್ಲಿ ಗೂಡುಗಳಿವೆ. ನಿನ್ನ ಯಜ್ಞವೇದಿಕೆಯ
ಸಮೀಪದಲ್ಲಿಯೇ ಗೂಡುಕಟ್ಟಿಕೊಂಡು ಮರಿ
ಮಾಡುತ್ತವೆ.
4 ನಿನ್ನಾಲಯದಲ್ಲಿ ವಾಸಿಸುವವರು ಭಾಗ್ಯವಂತರೇ ಸರಿ!
ಅವರು ನಿನ್ನನ್ನು ಸ್ತುತಿಸುತ್ತಲೇ ಇರುವರು,
5 ನಿನ್ನ ಶಕ್ತಿಯನ್ನೇ ಆಶ್ರಯಿಸಿಕೊಂಡು ಚೀಯೋನ್
ಪರ್ವತಕ್ಕೆ ಯಾತ್ರಿಕರಾಗಿ ಬರಲು ಬಯಸುವವರು
ಎಷ್ಟೋ ಭಾಗ್ಯವಂತರು.
6 ಒರತೆಯನ್ನಾಗಿ ಮಾಡಿರುವ ಬಾಕಾ ಕಣಿವೆಯ
ಮೂಲಕ ಅವರು ಪ್ರಯಾಣಮಾಡುವರು.
ಮುಂಗಾರು ಮಳೆಯು ಅದನ್ನು ನೀರಿನ ಕೊಳ್ಳಗ
ಳಿಂದ ಸಮೃದ್ಧಿಗೊಳಿಸುವುದು.
7 ಜನರು ದೇವರನ್ನು ಸಂದರ್ಶಿಸಲು ಊರಿಂದ
ಊರಿಗೆ ಪ್ರಯಾಣ ಮಾಡುತ್ತಾ ಚೀಯೋನಿಗೆ
ಬರುವರು.

8 ಸರ್ವಶಕ್ತ ಯೆಹೋವದೇವರೇ, ನನ್ನ ಪ್ರಾರ್ಥನೆಗೆ ಕಿವಿಗೊಡು. ಯಾಕೋಬನ ದೇವರೇ, ನನ್ನ ಮೊರೆಯನ್ನು ಕೇಳು.
9 ದೇವರೇ, ನಮಗೆ ಗುರಾಣಿಯಾಗಿರುವವನನ್ನು ನೋಡು. ನೀನು ಅಭಿಷೇಕಿಸಿದವನಿಗೆ ಕರುಣೆ ತೋರು.
10 ಬೇರೊಂದು ಸ್ಥಳದಲ್ಲಿ ಸಾವಿರ ದಿನಗಳಿರುವುದಕ್ಕಿಂತಲೂ ನಿನ್ನಾಲಯದಲ್ಲಿ ಒಂದು ದಿನವಿರುವುದೇ ಉತ್ತಮ. ದುಷ್ಟರ ಮನೆಯಲ್ಲಿ ವಾಸಿಸುವುದಕ್ಕಿಂತಲೂ ನನ್ನ ದೇವರ ಆಲಯದಲ್ಲಿ ದ್ವಾರಪಾಲಕನಾಗಿರುವುದೇ ಉತ್ತಮ.*
11 ಯೆಹೋವನು ನಮ್ಮ ಸಂರಕ್ಷಕನೂ ಮಹಿಮಾಪೂರ್ಣನಾದ ರಾಜನೂ ಆಗಿದ್ದಾನೆ.* ದೇವರು ನಮಗೆ ದಯೆಯನ್ನೂ ಘನತೆಯನ್ನೂ ಅನುಗ್ರಹಿಸುವನು. ಯೆಹೋವನು ಎಲ್ಲಾ ಒಳ್ಳೆಯವುಗಳನ್ನು ತನ್ನ ಭಕ್ತರಿಗೆ ಕೊಡುವನು.
12 ಸರ್ವಶಕ್ತನಾದ ಯೆಹೋವನೇ, ನಿನ್ನಲ್ಲಿ ಭರವಸವಿಡುವವರು ಭಾಗ್ಯವಂತರೇ ಸರಿ!

## ಕೀರ್ತನೆ 85

*ಸ್ತುತಿಗೀತೆ ರಚನೆಗಾರರು : ಕೋರಹೀಯರು*

1 ಯೆಹೋವನೇ, ನಿನ್ನ ದೇಶಕ್ಕೆ ಕರುಣೆತೋರು. ಯಾಕೋಬನ ಜನರು ಪರದೇಶದಲ್ಲಿ ಸೆರೆಯಾಳುಗಳಾಗಿದ್ದಾರೆ. ಅವರನ್ನು ಸ್ವದೇಶಕ್ಕೆ ಮತ್ತೆ ಕರೆದುಕೊಂಡು ಬಾ.
2 ನಿನ್ನ ಜನರನ್ನು ಕ್ಷಮಿಸು! ಅವರ ಪಾಪಗಳನ್ನು ಅಳಿಸಿಬಿಡು!
3 ನಿನ್ನ ರೌದ್ರವನ್ನು ತೊರೆದುಬಿಡು. ಉಗ್ರಕೋಪದಿಂದಿರಬೇಡ.
4 ನಮ್ಮ ರಕ್ಷಕನಾದ ದೇವರೇ, ನಮ್ಮ ಮೇಲೆ ನಿನಗಿರುವ ಕೋಪವನ್ನು ತೊರೆದು ನಮ್ಮನ್ನು ಮತ್ತೆ ಸ್ವೀಕರಿಸು.
5 ನಮ್ಮ ಮೇಲೆ ಸದಾಕಾಲ ಕೋಪದಿಂದಿರುವೆಯಾ?
6 ದಯವಿಟ್ಟು ನಮ್ಮನ್ನು ಮತ್ತೆ ಜೀವಿಸಮಾಡು! ನಿನ್ನ ಜನರನ್ನು ಸಂತೋಷಗೊಳಿಸು.
7 ಯೆಹೋವನೇ, ನಮ್ಮ ಮೇಲೆ ನಿನಗಿರುವ ಪ್ರೀತಿಯನ್ನು ತೋರಿಸು. ನಮ್ಮನ್ನು ರಕ್ಷಿಸು.
8 ದೇವರಾದ ಯೆಹೋವನು ಹೇಳಿದ್ದು ನನಗೆ ಕೇಳಿಸಿತು. ತನ್ನ ಜನರಿಗೂ ತನ್ನ ಸದ್ಭಕ್ತರಿಗೂ ಶಾಂತಿ ಇರುವುದೆಂದು ಆತನು ಹೇಳಿದನು. ಆದ್ದರಿಂದ ಅವರು ತಮ್ಮ ಮೂಢಜೀವನಕ್ಕೆ ಹೋಗಕೂಡದು.
9 ದೇವರು ತನ್ನ ಭಕ್ತರನ್ನು ರಕ್ಷಿಸುವಕಾಲ ಸಮೀಪವಾಗಿದೆ. ನಾವು ಸ್ವದೇಶದಲ್ಲಿ ಗೌರವದೊಂದಿಗೆ ನೆಲೆಸುವ ಸಮಯ ಹತ್ತಿರವಾಗಿದೆ.
10 ದೇವರ ನಿಜಪ್ರೀತಿಯು ಆತನ ಭಕ್ತರನ್ನು ಸಂಧಿಸುತ್ತದೆ. ನೀತಿಯೂ ಸಮಾಧಾನವೂ ಅವರಿಗೆ ಮುದ್ದಿಡುತ್ತವೆ.
11 ನಿವಾಸಿಗಳೆಲ್ಲರೂ ದೇವರಿಗೆ ನಂಬಿಗಸ್ತರಾಗಿರುವರು. ಪರಲೋಕದ ದೇವರು ಅವರಿಗೆ ಒಳ್ಳೆಯವನಾಗಿರುವನು.*
12 ಯೆಹೋವನು ನಮಗೆ ಒಳ್ಳೆಯವುಗಳನ್ನು ಹೇರಳವಾಗಿ ಒದಗಿಸುವನು. ಭೂಮಿಯು ಒಳ್ಳೆಯ ಬೆಳೆಗಳನ್ನು ಬೆಳೆಯಿಸುವುದು.
13 ನೀತಿಯು ಆತನ ಮುಂದೆ ಹೋಗುತ್ತಾ ಆತನಿಗಾಗಿ ಹಾದಿಯನ್ನು ಸಿದ್ಧಪಡಿಸುವುದು.

## ಕೀರ್ತನೆ 86

*ಪ್ರಾರ್ಥನೆ ರಚನೆಗಾರ : ದಾವೀದ*

1 ನಾನು ಬಡವನೂ ನಿಸ್ಸಹಾಯಕನೂ ಆಗಿದ್ದೇನೆ. ಯೆಹೋವನೇ, ದಯವಿಟ್ಟು ನನಗೆ ಕಿವಿಗೊಡು; ನನ್ನ ಪ್ರಾರ್ಥನೆಗೆ ಉತ್ತರಿಸು.
2 ಯೆಹೋವನೇ, ನಾನು ನಿನ್ನ ಭಕ್ತನು! ದಯವಿಟ್ಟು ನನ್ನನ್ನು ಸಂರಕ್ಷಿಸು! ನಾನು ನಿನ್ನ ಸೇವಕನು, ನೀನು ನನ್ನ ದೇವರು. ನಾನು ನಿನ್ನಲ್ಲಿ ಭರವಸವಿಟ್ಟಿರುವೆ, ಆದ್ದರಿಂದ ನನ್ನನ್ನು ರಕ್ಷಿಸು.
3 ನನ್ನ ಯೆಹೋವನೇ, ನನಗೆ ಕರುಣೆತೋರು. ನಾನು ದಿನವೆಲ್ಲಾ ನಿನಗೆ ಪ್ರಾರ್ಥಿಸುತ್ತಿದ್ದೇನೆ.
4 ಯೆಹೋವನೇ, ನನ್ನ ಜೀವಿತವನ್ನು ನಿನ್ನ ಕೈಗಳಲ್ಲಿಟ್ಟಿದ್ದೇನೆ. ನಿನ್ನ ಸೇವಕನಾದ ನನ್ನನ್ನು ಸಂತೋಷಗೊಳಿಸು.
5 ಯೆಹೋವನೇ, ನೀನು ಒಳ್ಳೆಯವನೂ ಕರುಣಾಮಯನೂ ಆಗಿರುವೆ. ನಿನ್ನ ಜನರು ಸಹಾಯಕ್ಕಾಗಿ ನಿನಗೆ ಮೊರೆಯಿಡುವರು. ನೀನು ಅವರನ್ನು ನಿಜವಾಗಿಯೂ ಪ್ರೀತಿಸುವಿ.
6 ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳು. ಕರುಣೆಗೋಸ್ಕರ ಮೊರೆಯಿಡುತ್ತಿರುವ ನನಗೆ ಕಿವಿಗೊಡು.
7 ಯೆಹೋವನೇ, ಆಪತ್ತಿನ ಸಮಯದಲ್ಲಿ ನಿನಗೆ ಪ್ರಾರ್ಥಿಸುತ್ತಿದ್ದೇನೆ. ನೀನು ಉತ್ತರವನ್ನು ದಯಪಾಲಿಸುವೆಯೆಂದು ನನಗೆ ಗೊತ್ತಿದೆ.

---

**ದುಷ್ಟರು ... ಉತ್ತಮ** ಅಥವಾ ''ದುಷ್ಟರ ಗುಡುರಗಳಲ್ಲಿ ವಾಸಿಸುವುದಕ್ಕಿಂತ ನನ್ನ ದೇವರ ಆಲಯದ ಬಾಗಿಲ ಬಳಿಯಲ್ಲಿ ಕುಳಿತುಕೊಂಡು ಭಿಕ್ಷೆಬೇಡುವುದೇ ಉತ್ತಮ.''

**ಸಂರಕ್ಷಕನೂ ... ರಾಜನಾಗಿದ್ದಾನೆ** ಅಕ್ಷರಶಃ ''ಸೂರ್ಯ ಮತ್ತು ಗುರಾಣಿ.''

**ನಿವಾಸಿ ... ಒಳ್ಳೆಯವನಾಗಿರುವನು** ಅಕ್ಷರಶಃ, ನಿಷ್ಠತೆಯು ಭೂಮಿಯಿಂದ ಉದಯಿಸುವುದು ಮತ್ತು ಒಳ್ಳೆಯತನವು ಆಕಾಶದಿಂದ ಕೆಳಗೆ ದೃಷ್ಟಿಸುವುದು.

8 ದೇವರೇ, ನಿನ್ನಂತೆ ಬೇರೆ ಯಾರೂ ಇಲ್ಲ. ನೀನು ಮಾಡಿರುವ ಕಾರ್ಯಗಳನ್ನು ಬೇರೆ ಯಾರೂ ಮಾಡಲಾರರು.
9 ಯೆಹೋವನೇ, ಪ್ರತಿಯೊಬ್ಬ ವ್ಯಕ್ತಿಯನ್ನು ಸೃಷ್ಟಿಸಿದವನು ನೀನೇ. ಅವರೆಲ್ಲರೂ ಬಂದು ನಿನ್ನನ್ನು ಆರಾಧಿಸಲಿ. ಅವರೆಲ್ಲರೂ ನಿನ್ನ ಹೆಸರನ್ನು ಸನ್ಮಾನಿಸಲಿ.
10 ದೇವರೇ, ನೀನು ಮಹೋನ್ನತನಾಗಿರುವೆ! ನೀನು ಅದ್ಭುತಕಾರ್ಯಗಳನ್ನು ಮಾಡುವಾತನಾಗಿರುವೆ! ನೀನೇ, ಹೌದು, ನೀನೊಬ್ಬನೇ ದೇವರು!
11 ಯೆಹೋವನೇ, ನಿನ್ನ ಮಾರ್ಗಗಳನ್ನು ನನಗೆ ಉಪದೇಶಿಸು. ನಾನು ಜೀವಿಸುತ್ತಾ ನಿನ್ನ ಸತ್ಯತೆಗಳಿಗೆ ವಿಧೇಯನಾಗುವೆನು. ನಿನ್ನ ಹೆಸರನ್ನು ಆರಾಧಿಸಲು ನನಗೆ ಸಹಾಯಮಾಡು. ನನ್ನ ಜೀವನದಲ್ಲಿ ಅದೇ ಅತ್ಯಂತ ಮುಖ್ಯವಾದದ್ದು.
12 ನನ್ನ ದೇವರಾದ ಯೆಹೋವನೇ ಪೂರ್ಣಹೃದಯದಿಂದ ನಿನ್ನನ್ನು ಸ್ತುತಿಸುವೆನು; ನಿನ್ನ ಹೆಸರನ್ನು ಎಂದೆಂದಿಗೂ ಸನ್ಮಾನಿಸುವೆನು!
13 ನೀನು ನನ್ನ ಮೇಲೆ ಎಷ್ಟೋ ಪ್ರೀತಿಯನ್ನು ಇಟ್ಟಿರುವೆ. ನೀನು ನನ್ನನ್ನು ಪಾತಾಳದಿಂದ ರಕ್ಷಿಸಿದೆ.
14 ದೇವರೇ, ಅಹಂಕಾರಿಗಳು ನನಗೆ ವಿರೋಧವಾಗಿ ಎದ್ದಿದ್ದಾರೆ. ಕ್ರೂರಜನರು ಗುಂಪುಕೂಡಿಕೊಂಡು ನನ್ನನ್ನು ಕೊಲ್ಲಲು ಪ್ರಯತ್ನಿಸುತ್ತಿದ್ದಾರೆ. ಅವರು ನನ್ನನ್ನು ಗೌರವಿಸುವುದಿಲ್ಲ.
15 ಯೆಹೋವನೇ, ಕನಿಕರವೂ ದಯೆಯೂ ಉಳ್ಳ ದೇವರು ನೀನೇ. ನೀನು ತಾಳ್ಮೆಯುಳ್ಳವನೂ ನಂಬಿಗಸ್ತನೂ ಪ್ರೀತಿಪೂರ್ಣನೂ ಆಗಿರುವೆ.
16 ನನ್ನ ಮೊರೆಗೆ ಕಿವಿಗೊಟ್ಟು ಕರುಣೆತೋರು. ನಿನ್ನ ಸೇವಕನಾದ ನನಗೆ ಬಲವನ್ನು ದಯಪಾಲಿಸು. ನಿನ್ನ ಗುಲಾಮನಾದ ನನ್ನನ್ನು ರಕ್ಷಿಸು.
17 ಯೆಹೋವನೇ ನೀನು ನನಗೆ ಮಾಡಲಿರುವ ಸಹಾಯಕ್ಕಾಗಿ ಸೂಚನೆಯೊಂದನ್ನು ತೋರಿಸು. ನನ್ನ ಶತ್ರುಗಳು ಆ ಸೂಚನೆಯನ್ನು ಕಂಡು ನಿರಾಶರಾಗುವರು. ನೀನು ನನ್ನ ಪ್ರಾರ್ಥನೆಗೆ ಕಿವಿಗೊಟ್ಟು ಸಹಾಯ ಮಾಡಲಿರುವಿಯೆಂದು ಅದು ತೋರಿಸುತ್ತದೆ.

## ಕೀರ್ತನೆ 87

ಸ್ತುತಿಗೀತೆ

ರಚನೆಗಾರರು : ಕೋರಹೀಯರು

1 ದೇವರು ತನ್ನ ಆಲಯವನ್ನು ಜೆರುಸಲೇಮಿನ ಪವಿತ್ರ ಪರ್ವತಗಳ ಮೇಲೆ ಕಟ್ಟಿದ್ದಾನೆ.
2 ಯೆಹೋವನು ಚೀಯೋನಿನ ಬಾಗಿಲುಗಳನ್ನು ಇಸ್ರೇಲಿನ ಇತರ ಸ್ಥಳಗಳಿಗಿಂತಲೂ ಹೆಚ್ಚಾಗಿ ಪ್ರೀತಿಸುವನು.
3 ದೇವರ ಪಟ್ಟಣವೇ, ಜನರು ನಿನ್ನ ಬಗ್ಗೆ ಆಶ್ಚರ್ಯಕರವಾದ ಸಂಗತಿಗಳನ್ನು ಹೇಳುವರು.
4 ದೇವಜನರು ಪ್ರಪಂಚದ ಅನೇಕ ಕಡೆಗಳಲ್ಲಿ ಈಗ ವಾಸವಾಗಿದ್ದಾರೆ. ಅವರಲ್ಲಿ ಕೆಲವರು ಈಜಿಪ್ಟಿನಲ್ಲಿಯೂ, ಬಾಬಿಲೋನಿನಲ್ಲಿಯೂ ನೆಲೆಸಿದ್ದಾರೆ. ಇನ್ನು ಕೆಲವರು ಫಿಲಿಷ್ಟಿಯದಲ್ಲಿಯೂ ತೂರಿನಲ್ಲಿಯೂ ಇಥಿಯೋಪಿಯದಲ್ಲಿಯೂ ನೆಲೆಸಿದ್ದಾರೆ.
5 ಚೀಯೋನಿನಲ್ಲಿ ಜನಿಸಿದ ಪ್ರತಿಯೊಬ್ಬರೂ ದೇವರಿಗೆ ಗೊತ್ತು. ಮಹೋನ್ನತನಾದ ದೇವರೇ ಆ ಪಟ್ಟಣವನ್ನು ಕಟ್ಟಿದನು.
6 ದೇವರು ತನ್ನ ಜನರೆಲ್ಲರ ಬಗ್ಗೆ ಪಟ್ಟಿ ಮಾಡಿದ್ದಾನೆ. ಪ್ರತಿಯೊಬ್ಬನ ಹುಟ್ಟಿದ ಸ್ಥಳವು ದೇವರಿಗೆ ತಿಳಿದಿದೆ.
7 ದೇವರ ಮಕ್ಕಳು ಹಬ್ಬಗಳನ್ನು ಆಚರಿಸಲು ಜೆರುಸಲೇಮಿಗೆ ಹೋಗುವರು. ಅವರು ಸಂತೋಷದಿಂದ ಹಾಡುತ್ತಾ ಕುಣಿದಾಡುವರು. ‘‘ಒಳ್ಳೆಯವುಗಳೆಲ್ಲ ಬರುವುದು ಜೆರುಸಲೇಮಿನಿಂದಲೇ’’ ಎಂದು ಅವರು ಹೇಳುವರು.

## ಕೀರ್ತನೆ 88

*ಸ್ತುತಿಗೀತೆ*

*ರಚನೆಗಾರರು : ಕೋರಹೀಯರಿಗೆ ಸೇರಿದ ಜೇರಹ ಕುಟುಂಬದ ಹೇಮಾನ.*

1 ಯೆಹೋವದೇವರೇ, ನೀನೇ ನನ್ನ ರಕ್ಷಕನು. ಹಗಲಿರುಳು ನಿನಗೆ ಪ್ರಾರ್ಥಿಸುತ್ತಿದ್ದೇನೆ.
2 ನನ್ನ ಪ್ರಾರ್ಥನೆಗಳಿಗೆ ದಯವಿಟ್ಟು ಗಮನಕೊಡು. ಕರುಣೆಗೋಸ್ಕರ ನಾನಿಡುವ ಮೊರೆಗಳನ್ನು ಆಲಿಸು .
3 ನನ್ನ ಜೀವವು ನೋವಿನಿಂದ ತುಂಬಿಹೋಯಿತು. ಮರಣವು ನನಗೆ ಸಮೀಪವಾಗಿದೆ.
4 ಜನರು ನನ್ನನ್ನು ಸತ್ತವನಂತೆಯೂ ಬದುಕಲಾರದ ಬಲಹೀನನಂತೆಯೂ ಪರಿಗಣಿಸಿದ್ದಾರೆ.
5 ಸತ್ತವರ ಮಧ್ಯದಲ್ಲಿ ನನಗಾಗಿ ಹುಡುಕು. ಸಮಾಧಿಯಲ್ಲಿ ಬಿದ್ದಿರುವ ಶವದಂತಾಗಿದ್ದೇನೆ, ನೀನು ಮರೆತುಬಿಟ್ಟ ಸತ್ತ ಜನರಂತೆ ಆಗಿದ್ದೇನೆ. ನಿನ್ನಿಂದಲೂ ನಿನ್ನ ಪರಿಪಾಲನೆಯಿಂದಲೂ ದೂರವಾದವನಾಗಿದ್ದೇನೆ.
6 ನೀನು ನನ್ನನ್ನು ಪಾತಾಳಕ್ಕೆದಬ್ಬಿರುವೆ; ನನ್ನನ್ನು ಕತ್ತಲೆಯ ಸ್ಥಳಕ್ಕೆ ನೂಕಿರುವೆ.
7 ನೀನು ನನ್ನ ಮೇಲೆ ಕೋಪಗೊಂಡಿದ್ದರಿಂದಲೇ ನನ್ನನ್ನು ಶಿಕ್ಷಿಸಿದೆ.
8 ಸ್ನೇಹಿತರು ನನ್ನನ್ನು ತೊರೆದುಬಿಟ್ಟರು. ಹೊಲೆಯಾದ ಮನುಷ್ಯನಂತೆ ಅವರೆಲ್ಲರೂ ನನ್ನನ್ನು ದೂರ ಮಾಡಿದ್ದಾರೆ. ನನ್ನನ್ನು ಮನೆಯೊಳಗೆ ದಬ್ಬಿ ಬೀಗ ಹಾಕಿದ್ದಾರೆ; ನಾನು ಹೊರಗೆ ಹೋಗಲಾರೆನು.
9 ನನ್ನ ಎಲ್ಲಾ ಸಂಕಟಗಳಿಂದ ಅತ್ತುಅತ್ತು ನನ್ನ ಕಣ್ಣುಗಳು ನೋಯುತ್ತಿವೆ. ಯೆಹೋವನೇ, ನಾನು ನಿನಗೆ

ಎಡಬಿಡದೆ ಪ್ರಾರ್ಥಿಸುವೆನು! ನನ್ನ ಕೈಗಳನ್ನು ಎತ್ತಿ ನಿನಗೆ ಪ್ರಾರ್ಥಿಸುವೆನು!

10 ಯೆಹೋವನೇ, ಸತ್ತ ಜನರಿಗಾಗಿ ನೀನು ಮಹತ್ಕಾರ್ಯಗಳನ್ನು ಮಾಡುವಿಯಾ? ಇಲ್ಲ! ದೆವ್ವಗಳು ಎದ್ದು ನಿಂತು ನಿನ್ನನ್ನು ಕೊಂಡಾಡುತ್ತವೆಯೋ? ಇಲ್ಲ!

11 ಸತ್ತ ಜನರು ತಮ್ಮ ಸಮಾಧಿಗಳಲ್ಲಿ ನಿನ್ನ ಪ್ರೀತಿಯ ಬಗ್ಗೆ ಮಾತಾಡಲಾರರು. ಸತ್ತವರು, ಸತ್ತವರಲೋಕದಲ್ಲಿ ನಿನ್ನ ನಂಬಿಗಸ್ತಿಕೆಯ ಬಗ್ಗೆ ಮಾತಾಡಲಾರರು.

12 ಸತ್ತು ಕತ್ತಲೆಯಲ್ಲಿ ಬಿದ್ದಿರುವ ಜನರು ನಿನ್ನ ಅದ್ಭುತ ಕಾರ್ಯಗಳನ್ನು ನೋಡಲಾರರು. ಸತ್ತವರು, ಮರೆಯಲ್ಪಟ್ಟವರ ಲೋಕದಲ್ಲಿ ನಿನ್ನ ನೀತಿಯ ಬಗ್ಗೆ ಮಾತಾಡಲಾರರು.

13 ಯೆಹೋವನೇ, ನಿನ್ನ ಸಹಾಯಕ್ಕಾಗಿ ಮೊರೆಯಿಡುತ್ತಿದ್ದೇನೆ. ಪ್ರತಿ ಮುಂಜಾನೆಯೂ ನಿನಗೆ ಪ್ರಾರ್ಥಿಸುತ್ತಿದ್ದೇನೆ.

14 ಯೆಹೋವನೇ, ನೀನು ನನ್ನನ್ನು ತೊರೆದು ಬಿಟ್ಟಿದ್ದೇಕೆ? ನೀನು ನನಗೆ ಕಿವಿಗೊಡದಿರುವುದೇಕೆ?

15 ನಾನು ಚಿಕ್ಕಂದಿನಿಂದಲೂ ಬಲಹೀನನಾಗಿದ್ದೇನೆ ಮತ್ತು ಕಾಯಿಲೆಯವನಾಗಿದ್ದೇನೆ. ನಿನ್ನ ಕೋಪದಿಂದ ನಾನು ಸಂಕಟಪಡುತ್ತಿರುವೆ. ನಾನು ನಿಸ್ಸಹಾಯಕನಾಗಿರುವೆ.

16 ನೀನು ನನ್ನ ಮೇಲೆ ಕೋಪಗೊಂಡಿದ್ದರಿಂದ ನಿನ್ನ ದಂಡನೆಯು ನನ್ನನ್ನು ಕೊಲ್ಲುತ್ತಿದೆ.

17 ಬಾಧೆಗಳೂ ನೋವುಗಳೂ ಯಾವಾಗಲೂ ನನ್ನೊಂದಿಗಿವೆ. ಬಾಧೆಗಳಿಂದಲೂ ನೋವುಗಳಿಂದಲೂ ಮುಳುಗಿ ಹೋಗುತ್ತಿದ್ದೇನೆ.

18 ಯೆಹೋವನೇ, ಸ್ನೇಹಿತರೆಲ್ಲರನ್ನೂ ಪ್ರಿಯರನ್ನೂ ನೀನು ನನ್ನಿಂದ ದೂರಮಾಡಿದೆ. ಕೇವಲ ಕತ್ತಲೆಯೊಂದೇ ನನ್ನೊಂದಿಗೆ ಉಳಿದುಕೊಂಡಿದೆ.

## ಕೀರ್ತನೆ 89

*ರಚನೆಗಾರ; ಜೆ'ಹನ ಕುಟುಂಬದ ಏತಾನ*

1 ಯೆಹೋವನೇ, ನಿನ್ನ ಪ್ರೀತಿಯನ್ನೂ ನಂಬಿಗಸ್ತಿಕೆಯನ್ನೂ ಸದಾಕಾಲ ಹಾಡಿ ಕೊಂಡಾಡುವೆನು!

2 ನಿನ್ನ ಶಾಶ್ವತ ಪ್ರೀತಿಯಲ್ಲಿ ನನಗೆ ದೃಢವಾದ ನಂಬಿಕೆಯಿದೆ. ನಿನ್ನ ನಂಬಿಗಸ್ತಿಕೆಯು ಆಕಾಶಗಳಂತೆ ಶಾಶ್ವತವಾಗಿದೆ.

3 ಆತನು ಹೇಳಿದ್ದೇನಂದರೆ: ‘‘ನಾನು ಆರಿಸಿಕೊಂಡ ರಾಜನೊಂದಿಗೆ ಒಂದು ಒಡಂಬಡಿಕೆಯನ್ನು ಮಾಡಿಕೊಂಡೆನು. ನನ್ನ ಸೇವಕನಾದ ದಾವೀದನಿಗೆ ಒಂದು ವಾಗ್ದಾನವನ್ನು ಮಾಡಿದೆನು ; ಅದೇನೆಂದರೆ,

4 ದಾವೀದನೇ, ನಿನ್ನ ಕುಟುಂಬವನ್ನು ಶಾಶ್ವತಗೊಳಿಸುವೆನು, ನಿನ್ನ ರಾಜ್ಯವನ್ನೂ ಶಾಶ್ವತಗೊಳಿಸುವೆನು.’’

5 ಯೆಹೋವನೇ, ನಿನ್ನ ಮಹತ್ಕಾರ್ಯಗಳ ಕುರಿತು ಆಕಾಶಮಂಡಲವು ಸ್ತುತಿಸುತ್ತಿದೆ. ಪರಿಶುದ್ಧರ ಸಭೆಯು ಅವುಗಳ ಕುರಿತು ಹಾಡಿಕೊಂಡಾಡುವುದು.

6 ಪರಲೋಕದಲ್ಲಿ ಯಾವನೂ ಯೆಹೋವನಿಗೆ ಸಮಾನನಲ್ಲ. ಯಾವ ದೇವರುಗಳನ್ನೂ ಯೆಹೋವನಿಗೆ ಹೋಲಿಸಲಾಗದು.

7 ದೇವರು ಪರಿಶುದ್ಧರ ಸಭೆ ಸೇರಿಸುವನು. ಆ ದೇವದೂತರೆಲ್ಲಾ ಆತನ ಸುತ್ತಲೂ ಸೇರಿಬರುವರು. ಅವರು ದೇವರಲ್ಲಿ ಭಯಭಕ್ತಿಯಿಂದಿರುವರು. ಆತನಿಗೆ ಭಯಪಡುತ್ತಾ ಆತನ ಸನ್ನಿಧಿಯಲ್ಲಿ ನಿಂತುಕೊಳ್ಳುವರು.

8 ಸರ್ವಶಕ್ತನಾದ ಯೆಹೋವ ದೇವರೇ, ನಿನ್ನಂತೆ ಬೇರೆ ಯಾರೂ ಇಲ್ಲ. ನೀನು ನಮ್ಮ ಸಂಪೂರ್ಣಭರವಸೆಗೆ ಯೋಗ್ಯನಾಗಿರುವೆ.

9 ಸಮುದ್ರವು ನಿನ್ನ ಅಧೀನದಲ್ಲಿದೆ. ಅದರ ರೋಷದ ಅಲೆಗಳನ್ನು ನೀನು ಶಾಂತಗೊಳಿಸುವೆ.

10 ರಹಾಬನನ್ನು ಸೋಲಿಸಿದಾತನು ನೀನೇ. ನಿನ್ನ ಭುಜಬಲದಿಂದ ನೀನು ಶತ್ರುಗಳನ್ನು ಚದರಿಸಿಬಿಟ್ಟೆ.

11 ದೇವರೇ, ಭೂಮ್ಯಾಕಾಶಗಳಲ್ಲಿರುವುದೆಲ್ಲಾ ನಿನ್ನವೇ. ಪ್ರಪಂಚವನ್ನೂ ಅದರಲ್ಲಿರುವ ಸಮಸ್ತವನ್ನೂ ಸೃಷ್ಟಿಸಿದಾತನು ನೀನೇ.

12 ಉತ್ತರ, ದಕ್ಷಿಣ ದಿಕ್ಕುಗಳನ್ನೂ ಪ್ರತಿಯೊಂದನ್ನೂ ಸೃಷ್ಟಿಸಿದಾತನು ನೀನೇ. ತಾಬೋರ್ ಮತ್ತು ಹೆರ್ಮೋನ್ ಬೆಟ್ಟಗಳು ನಿನ್ನ ಹೆಸರನ್ನು ಸಂಕೀರ್ತಿಸುತ್ತವೆ.

13 ದೇವರೇ, ಬಲವು ನಿನ್ನಲ್ಲೇ ಇದೆ. ನಿನ್ನ ಬಲವು ಮಹಾಬಲವೇ ಸರಿ! ಜಯವಂತೂ ನಿನ್ನದೇ!

14 ನಿನ್ನ ರಾಜ್ಯವು ಸತ್ಯದ ಮೇಲೆಯೂ ನ್ಯಾಯದ ಮೇಲೆಯೂ ಕಟ್ಟಲ್ಪಟ್ಟಿದೆ. ನಿನ್ನ ಸಿಂಹಾಸನದ ಮುಂದೆ ಪ್ರೀತಿಯೂ ನಂಬಿಗಸ್ತಿಕೆಯೂ ಸೇವಕರುಗಳಾಗಿವೆ.

15 ಯೆಹೋವನೇ, ನಿನ್ನ ಸದ್ಭಕ್ತರು ನಿಜವಾಗಿಯೂ ಸಂತೋಷವಾಗಿದ್ದಾರೆ. ಅವರು ನಿನ್ನ ಕರುಣೆಯ ಬೆಳಕಿನಲ್ಲಿ ವಾಸಿಸುತ್ತಿದ್ದಾರೆ.

16 ನಿನ್ನ ಹೆಸರು ಅವರನ್ನು ಯಾವಾಗಲೂ ಸಂತೋಷಗೊಳಿಸುತ್ತದೆ. ಅವರು ನಿನ್ನ ನೀತಿಯನ್ನು ಸ್ತುತಿಸುವರು.

17 ನೀನೇ ಅವರ ಅದ್ಭುತ ಶಕ್ತಿಯಾಗಿರುವೆ. ಅವರ ಶಕ್ತಿಯು ನಿನ್ನಿಂದಲೇ ಬರುತ್ತದೆ.

18 ಯೆಹೋವನೇ, ನೀನೇ ನಮ್ಮ ಸಂರಕ್ಷಕನು. ಇಸ್ರೇಲಿನ ಪರಿಶುದ್ಧನೇ ನಮ್ಮ ರಾಜನು.

19 ನೀನು ನಿನ್ನ ಸದ್ಭಕ್ತರೊಂದಿಗೆ ದರ್ಶನದಲ್ಲಿ ಮಾತಾಡಿದ್ದೇನೆಂದರೆ: ‘‘ಯುದ್ಧವೀರನೊಬ್ಬನಿಗೆ ಬಲವನ್ನು

ಅನುಗ್ರಹಿಸಿದೆ. ಜನಸಮೂಹದಿಂದ ಒಬ್ಬ ಯೌವನ
ಸ್ಥನನ್ನು ಆರಿಸಿಕೊಂಡು ಗಣ್ಯವ್ಯಕ್ತಿಯನ್ನಾಗಿ ಮಾಡಿದೆ.
20 ನನ್ನ ಸೇವಕನಾದ ದಾವೀದನನ್ನು ಕಂಡುಕೊಂಡೆ. ನನ್ನ
ವಿಶೇಷವಾದ ಎಣ್ಣೆಯಿಂದ ಅವನನ್ನು ಅಭಿಷೇಕಿಸಿದೆ.
21 ನನ್ನ ಬಲಗೈಯಿಂದ ದಾವೀದನಿಗೆ ಬೆಂಬಲನೀಡಿದೆ,
ನನ್ನ ಶಕ್ತಿಯಿಂದ ಅವನನ್ನು ಬಲಗೊಳಿಸಿದೆ.
22 ನಾನು ಆರಿಸಿಕೊಂಡ ರಾಜನನ್ನು ಸೋಲಿಸಲು ಶತ್ರು
ವಿಗೆ ಆಗಲಿಲ್ಲ. ಅವನನ್ನು ಸೋಲಿಸಲು ದುಷ್ಟಜನರಿಗೆ
ಆಗಲಿಲ್ಲ.
23 ನಾನು ಅವನ ಶತ್ರುಗಳನ್ನು ಮುಗಿಸಿದೆನು. ನಾನು
ಆರಿಸಿಕೊಂಡ ರಾಜನ ಮೇಲೆ ದ್ವೇಷಕಾರಿದ ಜನರನ್ನು
ಸೋಲಿಸಿದೆನು.
24 ನಾನು ಆರಿಸಿಕೊಂಡ ರಾಜನನ್ನು ಯಾವಾಗಲೂ
ಪ್ರೀತಿಸುವೆನು; ಅವನಿಗೇ ಬೆಂಬಲ ನೀಡುವೆನು.
ನಾನು ಅವನನ್ನು ಯಾವಾಗಲೂ ಬಲಗೊಳಿಸುವೆನು.
25 ನಾನು ಆರಿಸಿಕೊಂಡ ರಾಜನನ್ನು ಸಮುದ್ರದ ಮೇಲೆ
ಅಧಿಕಾರಿಯನ್ನಾಗಿ ನೇಮಿಸುವೆನು. ಅವನು ನದಿ
ಗಳನ್ನು ಹತೋಟಿಯಲ್ಲಿಡುವನು.
26 ಅವನು ನನಗೆ , 'ನೀನೇ ನನ್ನ ತಂದೆ ; ನೀನೇ ನನ್ನ
ದೇವರು. ನೀನೇ ನನ್ನ ಬಂಡೆ; ನೀನೇ ನನ್ನ ರಕ್ಷಕ '
ಎಂದು ಹೇಳುವನು.
27 ನಾನು ಅವನನ್ನು ನನ್ನ ಚೊಚ್ಚಲುಮಗನನ್ನಾಗಿ
ಮಾಡುವೆನು. ಅವನು ಭೂಲೋಕದಲ್ಲಿ ಮಹಾರಾಜ
ನಾಗಿರುವನು.
28 ನಾನು ಆರಿಸಿಕೊಂಡ ರಾಜನನ್ನು ನನ್ನ ಪ್ರೀತಿಯು
ಸದಾಕಾಲ ಸಂರಕ್ಷಿಸುವುದು. ನಾನು ಅವನೊಂದಿಗೆ
ಮಾಡಿಕೊಂಡಿರುವ ಒಡಂಬಡಿಕೆಯು ಎಂದಿಗೂ
ಕೊನೆಯಾಗದು.
29 ಅವನ ಕುಟಂಬವು ಶಾಶ್ವತವಾಗಿರುವುದು. ಅವನ
ರಾಜ್ಯವು ಆಕಾಶಗಳಿರುವವರೆಗೂ ಇರುವುದು.
30 ಅವನ ಸಂತತಿಯವರು ನನ್ನ ಧರ್ಮಶಾಸ್ತ್ರವನ್ನು
ತೊರೆದು ಬಿಟ್ಟು ನನ್ನ ಆಜ್ಞೆಗಳಿಗೆ ಅವಿಧೇಯರಾದರೆ
ಅವರನ್ನು ಶಿಕ್ಷಿಸುವೆನು.
31 ನಾನು ಆರಿಸಿಕೊಂಡ ರಾಜನ ಸಂತತಿಯವರು ನನ್ನ
ಕಟ್ಟಳೆಗಳನ್ನು ಉಲ್ಲಂಘಿಸಿ ನನ್ನ ಆಜ್ಞೆಗಳನ್ನು
ಅಲಕ್ಷಿಸಿದರೆ,
32 ಅವರನ್ನು ಬಹು ಕಠಿಣವಾಗಿ ಶಿಕ್ಷಿಸುವೆನು.
33 ಆದರೆ ಅವರ ಮೇಲೆ ನನಗಿರುವ ಪ್ರೀತಿಯು
ಎಂದಿಗೂ ನಿಂತು ಹೋಗುವುದಿಲ್ಲ. ನಾನು ಅವರಿಗೆ
ಯಾವಾಗಲೂ ನಂಬಿಗಸ್ತನಾಗಿರುವೆನು.
34 ನಾನು ದಾವೀದನೊಂದಿಗೆ ಮಾಡಿಕೊಂಡಿರುವ
ಒಡಂಬಡಿಕೆಯನ್ನು ಮುರಿದುಹಾಕುವುದೂ ಇಲ್ಲ.
ಬದಲಾಯಿಸುವುದೂ ಇಲ್ಲ.
35 ನನ್ನ ಪವಿತ್ರತ್ವದ ಮೇಲೆ ಆಣೆಯಿಟ್ಟು ದಾವೀದನಿಗೆ
ವಿಶೇಷವಾದ ವಾಗ್ದಾನವನ್ನು ಮಾಡಿದೆನು. ನಾನು
ದಾವೀದನಿಗೆ ಸುಳ್ಳುಗಾರನಾಗುವುದಿಲ್ಲ .
36 ದಾವೀದನ ಕುಟುಂಬವು ಶಾಶ್ವತವಾಗಿರುವುದು.
ಅವನ ರಾಜ್ಯವು ಸೂರ್ಯನು ಇರುವವರೆಗೂ
ಇರುವುದು.
37 ಅದು ಚಂದ್ರನಂತೆ ಶಾಶ್ವತವಾಗಿರುವುದು. ಈ
ಒಪ್ಪಂದಕ್ಕೆ ಆಕಾಶವೇ ಸಾಕ್ಷಿ. ಈ ಒಪ್ಪಂದವು ನಂಬಿಕೆಗೆ
ಯೋಗ್ಯವಾಗಿದೆ.''
38 ಆದರೆ ನೀನು ಆರಿಸಿಕೊಂಡ ರಾಜನ ಮೇಲೆ ನೀನು
ಕೋಪಗೊಂಡಿದ್ದರಿಂದಲೇ ಅವನನ್ನು ಒಬ್ಬಂಟಿಗನ
ನ್ನಾಗಿ ಬಿಟ್ಟುಬಿಟ್ಟೆ.
39 ನೀನು ನಿನ್ನ ಒಡಂಬಡಿಕೆಯನ್ನು ತಿರಸ್ಕರಿಸಿ ಅವನ
ಕಿರೀಟವನ್ನು ನೆಲದ ಮೇಲೆ ಎಸೆದುಬಿಟ್ಟೆ.
40 ಅವನ ಪಟ್ಟಣದ ಗೋಡೆಗಳನ್ನು ಕೆಡವಿಹಾಕಿದೆ;
ಅವನ ರಕ್ಷಣಾದುರ್ಗಗಳನ್ನೆಲ್ಲ ನಾಶಮಾಡಿದೆ.
41 ಅವನ ನೆರೆಹೊರೆಯವರು ಅವನನ್ನು ನೋಡಿ
ನಗುವರು. ದಾರಿಯಲ್ಲಿ ಹಾದುಹೋಗುವವರು
ಅವನಿಂದ ವಸ್ತುಗಳನ್ನು ಕದ್ದುಕೊಳ್ಳುವರು.
42 ಅವನ ಶತ್ರುಗಳಿಗೆಲ್ಲಾ ನೀನು ಸಂತೋಷವನ್ನುಂಟು
ಮಾಡಿರುವೆ. ಅವನ ಶತ್ರುಗಳಿಗೆ ಯುದ್ಧದಲ್ಲಿ ಜಯ
ವಾಗುವಂತೆ ಮಾಡಿದೆ.
43 ತಮ್ಮನ್ನು ರಕ್ಷಿಸಿಕೊಳ್ಳಲು ನೀನು ಅವರಿಗೆ ಸಹಾಯ
ಮಾಡಿದೆ. ನಿನ್ನ ರಾಜನಿಗಾದರೊ ಯುದ್ಧದಲ್ಲಿ
ಗೆಲ್ಲಲು ಸಹಾಯಮಾಡಲಿಲ್ಲ.
44 ನೀನು ಅವನ ಪವಿತ್ರ ಸಿಂಹಾಸನವನ್ನು ನೆಲಕ್ಕೆ
ಉರುಳಿಸಿಬಿಟ್ಟೆ.
45 ನೀನು ಅವನ ಜೀವಿತವನ್ನು ಮೊಟಕುಗೊಳಿಸಿ
ಅವನಿಗೆ ಅವಮಾನ ಮಾಡಿದೆ.
46 ಯೆಹೋವನೇ, ಇನ್ನೆಷ್ಟರವರೆಗೆ ನೀನು ನಮಗೆ ಮರೆ
ಯಾಗಿರುವೆ? ನಿನ್ನ ಕೋಪಾಗ್ನಿಯು ನಮ್ಮ ಮೇಲೆ
ಶಾಶ್ವತವಾಗಿ ಉರಿಯುವುದೊ?
47 ನಮ್ಮ ಜೀವಿತಕಾಲ ಸ್ವಲ್ಪವೆಂಬುದನ್ನು ಜ್ಞಾಪಿಸಿಕೊ.
ನಾವು ಸ್ವಲ್ಪಕಾಲ ಬದುಕಿ ಸಾಯುವುದಕ್ಕಾಗಿಯೇ
ನೀನು ನಮ್ಮನ್ನು ಸೃಷ್ಟಿಸಿದೆ.
48 ಮರಣ ಹೊಂದದೆ ಚಿರಂಜೀವಿಯಾಗಿರುವವನು
ಯಾರೂ ಇಲ್ಲ. ಯಾವ ವ್ಯಕ್ತಿಯೂ ಸಮಾಧಿಯಿಂದ
ತಪ್ಪಿಸಿಕೊಳ್ಳಲಾರನು.
49 ಯೆಹೋವನೇ, ಹಿಂದಿನಕಾಲದಲ್ಲಿ ನೀನು ತೋರಿದ
ಪ್ರೀತಿ ಎಲ್ಲಿ ಹೋಯಿತು? ದಾವೀದನ ಕುಟುಂಬಕ್ಕೆ
ನಂಬಿಗಸ್ತನಾಗಿರುತ್ತೇನೆಂದು ನೀನು ವಾಗ್ದಾನ
ಮಾಡಿದೆಯಲ್ಲಾ!
50-51 ಯೆಹೋವನೇ ನಿನ್ನ ಸೇವಕನಿಗೆ ಜನರು ಮಾಡಿದ
ಅವಮಾನವನ್ನು ದಯವಿಟ್ಟು ಜ್ಞಾಪಿಸಿಕೊ.

ಯೆಹೋವನೇ, ನಿನ್ನ ಶತ್ರುಗಳಿಂದ ಅವಮಾನಕರ
ವಾದ ಮಾತುಗಳನ್ನು ನಾನು ಕೇಳಬೇಕಾಯಿತು.
ನೀನು ಆರಿಸಿಕೊಂಡ ರಾಜನನ್ನು ಅವರು ಅವಮಾನ
ಮಾಡಿದರು!
52 ಯೆಹೋವನನ್ನು ಎಂದೆಂದಿಗೂ ಕೊಂಡಾಡಿರಿ!
ಆಮೆನ್, ಆಮೆನ್!

## ನಾಲ್ಕನೆ ಭಾಗ
### ಕೀರ್ತನೆ 90

*ಪ್ರಾರ್ಥನೆ, ರಚನೆಗಾರ: ದೇವಮನುಷ್ಯನಾದ ಮೋಶೆ*

1 ಯೆಹೋವನೇ, ತಲತಲಾಂತರಗಳಿಂದಲೂ ನೀನೇ
ನಮ್ಮ ವಾಸಸ್ಥಾನ.
2 ಬೆಟ್ಟಗಳು ಹುಟ್ಟುವುದಕ್ಕಿಂತ ಮೊದಲಿಂದಲೂ
ಭೂಮಿಯೂ ಅದರ ದೇಶಗಳೂ ನಿರ್ಮಾಣವಾಗು
ವುದಕ್ಕಿಂತ ಮೊದಲಿನಿಂದಲೂ ನೀನೇ ದೇವರು.
ಯಾವಾಗಲೂ ದೇವರಾಗಿದ್ದಾತನು ನೀನೇ!
ಯಾವಾಗಲೂ ದೇವರಾಗಿರುವಾತನೂ ನೀನೇ!
3 ಜನರಿಗೆ ಜನ್ಮ ನೀಡುವಾತನೂ ನೀನೇ; ಅವರನ್ನು
ಮತ್ತೆ ಧೂಳನ್ನಾಗಿ ಮಾಡುವಾತನೂ ನೀನೇ.
4 ಸಾವಿರ ವರುಷಗಳು ನಿನಗೆ ಗತಿಸಿಹೋದ ನಿನ್ನೆ
ಯಂತೆಯೂ ರಾತ್ರಿಯ ಜಾವದಂತೆಯೂ ಇವೆ.
5 ನೀನು ನಮ್ಮನ್ನು ಗುಡಿಸಿಹಾಕುವೆ. ನಮ್ಮ ಜೀವನವು
ಕನಸಿನಂತಿದೆ; ಹೊತ್ತಾರೆಯಲ್ಲಿ ನಾವು ಇಲ್ಲ
ವಾಗುತ್ತೇವೆ. ನಾವು ಹುಲ್ಲಿನಂತಿದ್ದೇವೆ.
6 ಹೊತ್ತಾರೆಯಲ್ಲಿ ಹುಲ್ಲು ಚಿಗುರತೊಡಗಿದರೂ
ಸಾಯಂಕಾಲದೊಳಗೆ ಒಣಗಿಹೋಗುತ್ತದೆ.
7 ದೇವರೇ, ನಿನ್ನ ಕೋಪದಿಂದ ನಾವು ನಾಶವಾದೆವು.
ನಿನ್ನ ರೌದ್ರವು ನಮ್ಮನ್ನು ಭಯಗೊಳಿಸಿದೆ.
8 ನಮ್ಮ ಪಾಪಗಳೆಲ್ಲಾ ನಿನಗೆ ತಿಳಿದಿವೆ. ದೇವರೇ, ನಮ್ಮ
ರಹಸ್ಯಪಾಪಗಳೆಲ್ಲಾ ನಿನ್ನ ಮುಂದೆ ಬಟ್ಟಬಯ
ಲಾಗಿವೆ.
9 ನಿನ್ನ ಕೋಪವು ನಮ್ಮ ಜೀವನವನ್ನು ಕೊನೆಗೊಳಿಸ
ಬಲ್ಲದು. ನಮ್ಮ ಜೀವಿತಗಳು ಪಿಸುಮಾತಿನಂತೆ ತೀರಿ
ಹೋದವು.
10 ನಮ್ಮ ಆಯುಷ್ಕಾಲವು ಎಪ್ಪತ್ತು ವರ್ಷ; ಬಲಹೆಚ್ಚಿದರೆ
ಎಂಭತ್ತು ವರ್ಷ. ಕಷ್ಟಸಂಕಟಗಳೇ ಅದರ ಆಡಂಬರ.
ಬಹು ಬೇಗನೆ ನಮ್ಮ ಜೀವಿತಗಳು ಕೊನೆಗೊಳ್ಳುತ್ತವೆ!
ನಾವು ಹಾರಿಹೋಗುತ್ತೇವೆ.
11 ದೇವರೇ, ನಿನ್ನ ಕೋಪದ ಪೂರ್ಣ ಬಲವನ್ನು
ಯಾರೂ ತಿಳಿಯರು. ನಿನ್ನಲ್ಲಿ ನಮಗಿರುವ ಭಯ
ಭಕ್ತಿಯು ನಿನ್ನ ಕೋಪದಷ್ಟೇ ದೊಡ್ಡದಾಗಿವೆ.
12 ನಮ್ಮ ಜೀವಿತಗಳು ಕೊಂಚವೇ ಎಂಬುದನ್ನು ನಮಗೆ
ಕಲಿಸು. ಆಗ ನಾವು ವಿವೇಕಿಗಳಾಗುವೆವು.
13 ಯೆಹೋವನೇ, ನಮ್ಮ ಬಳಿಗೆ ಹಿಂತಿರುಗಿ ಬಾ. ನಿನ್ನ
ಸೇವಕರಿಗೆ ಕರುಣೆತೋರು.
14 ಪ್ರತಿ ಮುಂಜಾನೆ ನಿನ್ನ ಪ್ರೀತಿಯಿಂದ ನಮ್ಮನ್ನು
ತುಂಬಿಸು. ಆಗ ಜೀವಮಾನವೆಲ್ಲಾ ಉಲ್ಲಾಸಿಸಿ
ಹರ್ಷಿಸುವೆವು.
15 ನೀನು ನಮಗೆ ಬಹು ದುಃಖವನ್ನೂ ಕಷ್ಟಗಳನ್ನೂ ಬರ
ಮಾಡಿದೆ. ಈಗ ನಮ್ಮನ್ನು ಸಂತೋಷಗೊಳಿಸು.
16 ನೀನು ನಿನ್ನ ಸೇವಕರುಗಳಿಗಾಗಿ ಮಾಡಬಲ್ಲ ಅದ್ಭುತ
ಕಾರ್ಯಗಳನ್ನು ನಾವು ನೋಡುವಂತಾಗಲಿ.
17 ನಮ್ಮ ದೇವರಾದ ಯೆಹೋವನೇ, ನಮಗೆ ಕರುಣೆ
ತೋರು. ನಮ್ಮ ಕೆಲಸಕಾರ್ಯಗಳು ನಮಗೆ ಫಲ
ನೀಡಲಿ; ನಮ್ಮ ಕಾರ್ಯಗಳನ್ನು ಆತನು ಸಫಲ
ಪಡಿಸಲಿ.

### ಕೀರ್ತನೆ 91

1 ಮಹೋನ್ನತನ ಮೊರೆಹೊಕ್ಕಿರುವವನು ಸರ್ವಶಕ್ತನ
ಆಶ್ರಯದಲ್ಲಿ ಸುರಕ್ಷಿತನಾಗಿರುವನು.
2 ನಾನು ಯೆಹೋವನಿಗೆ, ‘‘ನೀನೇ ನನ್ನ ಆಶ್ರಯ
ಸ್ಥಾನವೂ, ನನ್ನ ಕೋಟೆಯೂ, ನಾನು ಭರವಸ
ವಿಟ್ಟಿರುವ ನನ್ನ ದೇವರೂ’’ ಎಂದು ಹೇಳುವೆನು.
3 ನಿನ್ನನ್ನು ಬೇಟೆಗಾರನ ಬಲೆಯಿಂದಲೂ ಮರಣಕರ
ವಾದ ವ್ಯಾಧಿಯಿಂದಲೂ ತಪ್ಪಿಸುವವನು ಆತನೇ.
4 ಆತನು ನಿನ್ನನ್ನು ತನ್ನ ರೆಕ್ಕೆಗಳಿಂದ ಹೊದಗಿಸಿ
ಕೊಳ್ಳುವನು. ಆತನ ರೆಕ್ಕೆಗಳನ್ನು ನೀನು ಆಶ್ರಯಿಸಿ
ಕೊಳ್ಳುವೆ. ಆತನ ನಂಬಿಗಸ್ತಿಕೆಯು ನಿನಗೆ
ಗುರಾಣಿಯೂ ಕೋಟೆಯೂ ಆಗಿದೆ.
5 ಇರುಳಲ್ಲಿ ನೀನು ಯಾವುದಕ್ಕೂ ಭಯಪಡಬೇಕಿಲ್ಲ;
ಹಗಲಲ್ಲಿ ಶತ್ರುಗಳ ಬಾಣಗಳಿಗೂ ನೀನು ಹೆದರ
ಬೇಕಿಲ್ಲ.
6 ಕತ್ತಲೆಯಲ್ಲಿ ಬರುವ ರೋಗಗಳಿಗಾಗಲೀ ಮಧ್ಯಾಹ್ನ
ದಲ್ಲಿ ಬರುವ ಭಯಂಕರ ಕಾಯಿಲೆಗಳಿಗಾಗಲೀ
ನೀನು ಹೆದರಬೇಕಿಲ್ಲ.
7 ನೀನು ಸಾವಿರ ವೈರಿಗಳನ್ನು ಸೋಲಿಸುವೆ. ನಿನ್ನ ಬಲಗೈ
ಹತ್ತು ಸಾವಿರ ಶತ್ರು ಸೈನಿಕರನ್ನು ಸೋಲಿಸುವುದು.
ನಿನ್ನ ಶತ್ರುಗಳಿಗೆ ನಿನ್ನನ್ನು ಮುಟ್ಟಲೂ ಸಾಧ್ಯವಾಗದು.
8 ನೀನು ಅದನ್ನು ಕಣ್ಣಾರೆಕಂಡು ದುಷ್ಟರಿಗೆ ದಂಡನೆ
ಯಾಯಿತೆಂದು ತಿಳಿದುಕೊಳ್ಳುವೆ.
9 ಯಾಕೆಂದರೆ ನಿನ್ನ ಭರವಸವು ಯೆಹೋವನಲ್ಲಿಯೇ.
ನಿನ್ನ ಆಶ್ರಯಸ್ಥಾನವು ಮಹೋನ್ನತನಾದ ದೇವರೇ.
10 ಯಾವ ಕೇಡೂ ನಿನಗೆ ಸಂಭವಿಸದು. ನಿನ್ನ ಮನೆಯಲ್ಲಿ
ಯಾವ ರೋಗಗಳೂ ಇರದು.
11 ನೀನು ಹೋದಲ್ಲೆಲ್ಲಾ ನಿನ್ನನ್ನು ಕಾಯಲು ಆತನು ತನ್ನ
ದೂತರಿಗೆ ಆಜ್ಞಾಪಿಸುವನು.

12 ನಿನ್ನ ಪಾದಗಳು ಕಲ್ಲಿಗೆ ತಗಲದಂತೆ ದೇವದೂತರು ಗಳು ನಿನ್ನನ್ನು ಕೈಗಳಲ್ಲಿ ಎತ್ತಿಕೊಳ್ಳುವರು.
13 ಸಿಂಹಗಳ ಮೇಲೆಯೂ ಮತ್ತು ವಿಷಸರ್ಪಗಳ ಮೇಲೆಯೂ ನಡೆಯಲು ನೀನು ಶಕ್ತನಾಗಿರುವೆ.
14 ಯೆಹೋವನು ಹೇಳುವುದೇನೆಂದರೆ: ‘‘ನನ್ನಲ್ಲಿ ಭರವಸವಿಡುವವನನ್ನು ರಕ್ಷಿಸುವೆನು; ನನ್ನ ಹೆಸರನ್ನು ಆರಾಧಿಸುವ ಭಕ್ತರನ್ನು ಸಂರಕ್ಷಿಸುವೆನು.
15 ನನ್ನ ಭಕ್ತರು ಸಹಾಯಕ್ಕಾಗಿ ಮೊರೆಯಿಡುವಾಗ, ಸದುತ್ತರವನ್ನು ದಯಪಾಲಿಸುವೆನು. ಆಪತ್ತಿನಲ್ಲಿಯೂ ನಾನು ಅವರೊಂದಿಗಿರುವೆನು; ಅವರನ್ನು ತಪ್ಪಿಸಿ ಘನಪಡಿಸುವೆನು.
16 ನನ್ನ ಭಕ್ತರಿಗೆ ದೀರ್ಘಾಯುಷ್ಯವನ್ನು ನೀಡಿ ಕಾಪಾಡುವೆನು.’’

## ಕೀರ್ತನೆ 92

*ಸಬ್ಬತ್* ದಿನದ ಸ್ತುತಿಗೀತೆ*

1 ಯೆಹೋವನೇ, ನಿನ್ನನ್ನು ಸ್ತುತಿಸುವುದೂ ಮಹೋನ್ನತನಾದ ದೇವರೇ, ನಿನ್ನ ಹೆಸರನ್ನು ಕೊಂಡಾಡುವುದೂ ಯುಕ್ತವಾಗಿದೆ.
2 ಹತ್ತು ತಂತಿವಾದ್ಯಗಳನ್ನೂ ಹಾರ್ಪ್ ಮತ್ತು ಲೈರ್ ವಾದ್ಯಗಳನ್ನೂ ನುಡಿಸುತ್ತಾ ನಿನ್ನ ಪ್ರೀತಿಯ ಕುರಿತು ಮುಂಜಾನೆಯಲ್ಲಿಯೂ ನಿನ್ನ ನಂಬಿಗಸ್ತಿಕೆಯ ಕುರಿತು ರಾತ್ರಿಯಲ್ಲಿಯೂ ಹಾಡುವುದು ಯುಕ್ತವಾಗಿದೆ.
4 ಯೆಹೋವನೇ, ನಿನ್ನ ಕಾರ್ಯಗಳಿಂದ ನಮ್ಮನ್ನು ನಿಜವಾಗಿಯೂ ಸಂತೋಷಗೊಳಿಸಿರುವೆ. ಅವುಗಳ ಕುರಿತು ನಾವು ಹರ್ಷದಿಂದ ಹಾಡುವೆವು.
5 ಯೆಹೋವನೇ, ನೀನು ಅಂತಹ ಮಹಾಕಾರ್ಯಗಳನ್ನು ಮಾಡಿರುವೆ. ನಿನ್ನ ಆಲೋಚನೆಗಳನ್ನು ಗ್ರಹಿಸಿಕೊಳ್ಳಲು ನಮ್ಮಿಂದಾಗದು.
6 ನಿನಗೆ ಹೋಲಿಸಿದರೆ, ಜನರು ದಡ್ಡ ಪ್ರಾಣಿಗಳಂತಿದ್ದಾರೆ. ನಾವು ಯಾವುದನ್ನೂ ಅರ್ಥಮಾಡಿಕೊಳ್ಳಲಾಗದ ಮೂಢರಂತಿದ್ದೇವೆ.
7 ದುಷ್ಟರು ಹುಲ್ಲಿನಂತೆ ಬದುಕಿ ಸಾಯುವರು. ಅವರ ನಿರರ್ಥಕ ಕಾರ್ಯಗಳು ನಿತ್ಯ ನಾಶವಾಗುತ್ತವೆ.
8 ಯೆಹೋವನೇ, ನೀನಾದರೊ ಸದಾಕಾಲ ಸನ್ಮಾನ ಹೊಂದುವೆ.
9 ಯೆಹೋವನೇ, ನಿನ್ನ ಶತ್ರುಗಳೆಲ್ಲ ನಾಶವಾಗುವರು ಕೆಟ್ಟ ಕಾರ್ಯಗಳನ್ನು ಮಾಡುವ ಅವರೆಲ್ಲರೂ ನಾಶವಾಗುವರು.
10 ನನ್ನನ್ನಾದರೋ ನೀನು ಬಲಿಷ್ಠನನ್ನಾಗಿ ಮಾಡುವೆ. ನಾನು ಬಲವಾದ ಕೊಂಬುಗಳುಳ್ಳ ಟಗರಿನಂತಿರುವೆನು. ನನ್ನನ್ನು ವಿಶೇಷವಾದ ಕಾರ್ಯಕ್ಕೋಸ್ಕರ ಆರಿಸಿಕೊಂಡಾತನು ನೀನೇ. ನಿನ್ನ ಚೈತನ್ಯ ತೈಲವನ್ನು ನನ್ನ ಮೇಲೆ ಸುರಿದಾತನು ನೀನೇ.
11 ವೈರಿಗಳು ನನ್ನ ಸುತ್ತಲೂ ಸೇರಿ ಬಂದಿದ್ದಾರೆ ಅವರು ಆಕ್ರಮಣಕ್ಕೆ ಸಿದ್ಧವಾಗಿರುವ ದೊಡ್ಡ ಹೋರಿಗಳಂತಿದ್ದಾರೆ. ಅವರು ನನ್ನ ಬಗ್ಗೆ ಹೇಳುತ್ತಿರುವುದೂ ನನಗೆ ಕೇಳುತ್ತಿದೆ.
12-13 ನೀತಿವಂತರಾದರೋ ಯೆಹೋವನ ಆಲಯದಲ್ಲಿ ಬೆಳೆಯುತ್ತಿರುವ ಲೆಬನೋನಿನ ದೇವದಾರು ವೃಕ್ಷದಂತಿರುವರು. ನೀತಿವಂತರಾದರೋ ನಮ್ಮ ದೇವಾಲಯದ ಅಂಗಳದಲ್ಲಿ ಮೊಗ್ಗುಬಿಡುತ್ತಿರುವ ಖರ್ಜೂರದ ಮರಗಳಂತಿರುವರು. ಅವರು ಮುಪ್ಪಿನಲ್ಲಿಯೂ ಪುಷ್ಟಿಯಾಗಿ ಬೆಳೆದಿರುವ ಎಳೆಮರಗಳಂತೆ ಫಲಿಸುವರು.
14 ಯೆಹೋವನು ಒಳ್ಳೆಯವನೆಂಬುವುದಕ್ಕೆ ಅವರು ದೃಷ್ಟಾಂತವಾಗಿರುವರು.
15 ಆತನೇ ನನ್ನ ಬಂಡೆ. ಆತನು ಎಂದಿಗೂ ತಪ್ಪು ಮಾಡನು.

## ಕೀರ್ತನೆ 93

1 ಯೆಹೋವನೇ ರಾಜನು. ಆತನು ವೈಭವವನ್ನೂ ಬಲವನ್ನೂ ವಸ್ತ್ರದಂತೆ ಧರಿಸಿಕೊಂಡಿದ್ದಾನೆ. ಆತನು ಸಿದ್ಧನಾಗಿರುವುದರಿಂದ ಇಡೀ ಪ್ರಪಂಚವೇ ಸುರಕ್ಷಿತವಾಗಿರುವುದು. ಅದು ಕದಲುವುದೇ ಇಲ್ಲ.
2 ದೇವರೇ, ಆದಿಯಿಂದಲೂ ನಿನ್ನ ರಾಜ್ಯವು ಶಾಶ್ವತವಾಗಿದೆ. ಆದಿಯಿಂದಲೂ ಇರುವಾತನು ನೀನೊಬ್ಬನೇ!
3 ಯೆಹೋವನೇ, ನದಿಗಳ ಶಬ್ದವು ಮೊರೆಯುತ್ತಿದೆ. ರಭಸದಿಂದ ಬಡಿಯುತ್ತಿರುವ ಅಲೆಗಳು ಭೋರ್ಗರೆಯುತ್ತಿವೆ.
4 ಬಿರುಸಾಗಿ ಬಡಿಯುತ್ತಿರುವ ಸಮುದ್ರದ ಅಲೆಗಳು ಭೋರ್ಗರೆಯುತ್ತಾ ಪ್ರಬಲವಾಗಿವೆ. ಆದರೆ ಉನ್ನತದಲ್ಲಿರುವ ಯೆಹೋವನು ಅದಕ್ಕಿಂತ ಎಷ್ಟೋ ಬಲಿಷ್ಠನಾಗಿದ್ದಾನೆ.
5 ಯೆಹೋವನೇ, ನಿನ್ನ ಕಟ್ಟಳೆಗಳು ಶಾಶ್ವತವಾಗಿವೆ. ನಿನ್ನ ಪವಿತ್ರಾಲಯವು ಬಹುಕಾಲದವರೆಗೆ ಇರುತ್ತದೆ.

## ಕೀರ್ತನೆ 94

1 ಯೆಹೋವನೇ, ನೀನು ಸೇಡುತೀರಿಸಿಕೊಳ್ಳುವ ದೇವರು! ಸೇಡು ತೀರಿಸಿಕೊಳ್ಳುವ ದೇವರೇ ಪ್ರತ್ಯಕ್ಷನಾಗು!
2 ಇಡೀಲೋಕದ ನ್ಯಾಯಾಧಿಪತಿ ನೀನೇ. ಅಹಂಕಾರಿಗಳಿಗೆ ತಕ್ಕ ದಂಡನೆಯನ್ನು ಕೊಡು.

---

**ಸಬ್ಬತ್** ಶನಿವಾರ. ಇದು ಯೆಹೂದ್ಯರಿಗೆ ವಿಶೇಷವಾದ ವಿಶ್ರಾಂತಿಯ ಮತ್ತು ಆರಾಧನೆಯ ದಿನ.

3 ಯೆಹೋವನೇ, ದುಷ್ಟಜನರು ಎಷ್ಟರವರೆಗೆ ಪರಿ
ಹಾಸ್ಯ ಮಾಡುವರು? ಇನ್ನೆಷ್ಟರವರೆಗೆ ಪರಿಹಾಸ್ಯ
ಮಾಡುವರು?
4 ಆ ಅಪರಾಧಿಗಳು ತಮ್ಮ ದುಷ್ಕೃತ್ಯಗಳ ಬಗ್ಗೆ ಇನ್ನೆಷ್ಟರ
ವರೆಗೆ ಜಂಬಕೊಚ್ಚಿಕೊಳ್ಳುವರು?
5 ಯೆಹೋವನೇ, ಅವರು ನಿನ್ನ ಜನರಿಗೆ ಕೇಡು
ಮಾಡಿದ್ದಾರೆ. ಅವರು ನಿನ್ನ ಜನರನ್ನು ಹಿಂಸೆ
ಪಡಿಸಿದ್ದಾರೆ.
6 ನಮ್ಮ ದೇಶದಲ್ಲಿ ವಾಸವಾಗಿರುವ ವಿಧವೆಯರನ್ನೂ
ವಿಧೇಶಿಯರನ್ನೂ ಆ ದುಷ್ಟರು ಕೊಲ್ಲುತ್ತಾರೆ. ಅವರು
ಅನಾಥ ಮಕ್ಕಳನ್ನೂ ಕೊಲೆಮಾಡುವರು.
7 ಆ ದುಷ್ಕೃತ್ಯಗಳು ಯೆಹೋವನಿಗೆ ಕಾಣದೆಂದು
ಅವರು ಹೇಳಿಕೊಳ್ಳುತ್ತಾರೆ. ಅವುಗಳು ಇಸ್ರೇಲಿನ
ದೇವರಿಗೆ ತಿಳಿಯದೆಂದು ಅವರು ಹೇಳುತ್ತಾರೆ.
8 ದುಷ್ಟರೇ, ನೀವು ಮೂಢರಾಗಿದ್ದೀರಿ! ನೀವು ಪಾಠ
ವನ್ನು ಕಲಿತುಕೊಳ್ಳುವುದು ಯಾವಾಗ? ದುಷ್ಟರೇ
ನೀವು ಬಹು ದಡ್ಡರಾಗಿದ್ದೀರಿ! ಅರ್ಥಮಾಡಿಕೊಳ್ಳಲು
ನೀವು ಪ್ರಯತ್ನಿಸಬೇಕು.
9 ಕಿವಿಗಳನ್ನು ಸೃಷ್ಟಿಸಿದಾತನಿಗೆ ಕೇಳುವುದಿಲ್ಲವೇ? ಕಣ್ಣು
ಗಳನ್ನು ಸೃಷ್ಟಿಸಿದಾತನಿಗೆ ಕಾಣುವುದಿಲ್ಲವೇ?
10 ಜನಾಂಗಗಳನ್ನು ಶಿಕ್ಷಿಸುವಾತನು ದೇವರೇ. ಜನರಿಗೆ
ಉಪದೇಶಿಸುವವನೂ ಆತನೇ .
11 ಮನುಷ್ಯರ ಆಲೋಚನೆಗಳೆಲ್ಲಾ ಆತನಿಗೆ ತಿಳಿದಿದೆ.
ಮನುಷ್ಯರು ಕೇವಲ ಉಸಿರೆಂಬುದು ಆತನಿಗೆ
ತಿಳಿದಿದೆ.
12 ಯೆಹೋವನಿಂದ ಶಿಕ್ಷಿಸಲ್ಪಡುವವನು ಭಾಗ್ಯವಂತನೇ
ಸರಿ. ದೇವರು ಅವನಿಗೆ ನೀತಿ ಮಾರ್ಗವನ್ನು ಉಪ
ದೇಶಿಸುವನು.
13 ಆಪತ್ತಿನಲ್ಲಿಯೂ ಸಮಾಧಾನದಿಂದಿರಲು ನೀನು
ಅವನಿಗೆ ಸಹಾಯಮಾಡುವೆ. ದುಷ್ಟರು ಸಮಾಧಿಗಳಿಗೆ
ಸೇರುವವರೆಗೆ ಸಮಾಧಾನದಿಂದಿರಲು ನೀನು
ಅವನಿಗೆ ನೆರವು ನೀಡುವೆ.
14 ಯೆಹೋವನು ತನ್ನ ಜನರನ್ನು ತೊರೆದುಬಿಡುವು
ದಿಲ್ಲ. ಆತನು ತನ್ನ ಜನರನ್ನು ನಿಸ್ಸಹಾಯಕರನ್ನಾಗಿ
ಮಾಡುವುದಿಲ್ಲ.
15 ನ್ಯಾಯವು ನೀತಿಯೊಂದಿಗೆ ಮರಳಿ ಬರುವುದು. ಆಗ
ಜನರು ಒಳ್ಳೆಯವರೂ ಯಥಾರ್ಥವಂತರೂ
ಆಗುವರು.
16 ದುಷ್ಟರಿಗೆ ವಿರೋಧವಾಗಿ ಯಾರೂ ನನಗೆ ಸಹಾಯ
ಮಾಡಲಿಲ್ಲ. ದುಷ್ಕೃತ್ಯಗಳನ್ನು ಮಾಡುವವರ ವಿರುದ್ಧ
ವಾಗಿ ಯಾರೂ ನನ್ನೊಂದಿಗೆ ನಿಂತುಕೊಳ್ಳಲಿಲ್ಲ.
17 ಯೆಹೋವನು ನನಗೆ ಸಹಾಯಮಾಡಿಲ್ಲದಿದ್ದರೆ,
ಇಷ್ಟರಲ್ಲೇ ಸಮಾಧಿ ಸೇರುತ್ತಿದ್ದೆನು.
18 ಯೆಹೋವನೇ, ಜಾರಿಹೋಗುತ್ತಿರುವೆ ಎಂದು ಮೊರೆ
ಯಿಟ್ಟಾಗ ಆತನು ನನಗೆ ಆಧಾರ ನೀಡಿದನು.
19 ನಾನು ಚಿಂತೆಗಳಿಂದ ಗಲಿಬಿಲಿಗೊಂಡಿದ್ದಾಗ ನೀನು
ನನ್ನನ್ನು ಸಂತೈಸಿ ಸಂತೋಷಪಡಿಸಿದೆ.
20 ದೇವರೇ, ಮೋಸಗಾರರಾದ ನ್ಯಾಯಾಧೀಶರಿಗೆ
ಸಹಾಯ ಮಾಡಬೇಡ. ಅವರು ಕಾನೂನನ್ನು
ಡೊಂಕು ಮಾಡಿ ಜನರನ್ನು ಹಿಂಸಿಸುವರು.
21 ಅವರು ನೀತಿವಂತರಿಗೆ ಎದುರಾಗಿ ನಿರಪರಾಧಿಗಳಿಗೆ
ಮರಣದಂಡನೆ ವಿಧಿಸುವರು.
22 ನನಗಾದರೋ ಯೆಹೋವನು ಪರ್ವತದ ಮೇಲಿ
ರುವ ಆಶ್ರಯಸ್ಥಾನವಾಗಿದ್ದಾನೆ. ನನ್ನ ಬಂಡೆಯಾಗಿ
ರುವ ದೇವರು ನನಗೆ ಆಶ್ರಯಗಿರಿಯಾಗಿದ್ದಾನೆ!
23 ಆತನು ಆ ದುಷ್ಟ ನ್ಯಾಯಾಧೀಶರನ್ನು ಅವರ ದುಷ್ಕೃತ್ಯ
ಗಳ ನಿಮಿತ್ತ ದಂಡಿಸುವನು. ಅವರ ಪಾಪಗಳ ನಿಮಿತ್ತ
ದೇವರು ಅವರನ್ನು ನಾಶಮಾಡುವನು. ನಮ್ಮ ದೇವ
ರಾದ ಯೆಹೋವನು ಆ ದುಷ್ಟ ನ್ಯಾಯಾಧೀಶರನ್ನು
ನಾಶಮಾಡುವನು.

## ಕೀರ್ತನೆ 95

1 ಬನ್ನಿರಿ, ನಾವು ಯೆಹೋವನನ್ನು ಸ್ತುತಿಸೋಣ!
ನಮಗೆಬಂಡೆಯಾಗಿರುವಾತನನ್ನುಕೊಂಡಾಡೋಣ.
2 ಆತನಿಗೆ ಕೃತಜ್ಞತಾಸ್ತುತಿ ಮಾಡೋಣ. ಸ್ತುತಿಗೀತೆ
ಗಳೊಡನೆ ಆನಂದಘೋಷ ಮಾಡೋಣ.
3 ಯಾಕಂದರೆ ಯೆಹೋವನು ಮಹಾದೇವರಾಗಿ
ದ್ದಾನೆ! ಆತನು ದೇವರುಗಳಿಗೆಲ್ಲಾ ಮಹಾರಾಜ
ನಾಗಿದ್ದಾನೆ.
4 ಭೂಮಿಯ ಆಳವೂ ಉನ್ನತೋನ್ನತವಾದ ಶಿಖರ
ಗಳೂ ಆತನವೇ. ಸಮುದ್ರವು ಆತನದೇ. ಅದನ್ನು
ಸೃಷ್ಟಿಸಿದಾತನು ಆತನೇ. ಭೂಮಿಯೂ ಆತನ
ಕೈಕೆಲಸವೇ.
6 ಬನ್ನಿರಿ, ಆತನಿಗೆ ಅಡ್ಡಬಿದ್ದು ಆರಾಧಿಸೋಣ.
ನಮ್ಮನ್ನು ಸೃಷ್ಟಿಸಿದ ಯೆಹೋವನನ್ನು
ಕೊಂಡಾಡೋಣ.
7 ನಮ್ಮ ದೇವರು ಆತನೇ, ನಾವು ಆತನವರೇ. ಆತನ
ಸ್ವರಕ್ಕೆ ಕಿವಿಗೊಡುವುದಾದರೆ ಇಂದೇ ನಾವು ಆತನ
ಮಂದೆಯಾಗುತ್ತೇವೆ.
8 ದೇವರು ಇಂತೆನ್ನುತ್ತಾನೆ: ‘‘ನೀವು ಮೆರೀಬದಲ್ಲಿಯೂ
ಮಸ್ಸಾ ಮರುಭೂಮಿಯಲ್ಲಿಯೂ ಮಾಡಿದಂತೆ
ಮೊಂಡರಾಗಿರಬೇಡಿ.
9 ನಿಮ್ಮ ಪೂರ್ವಿಕರು ನನ್ನನ್ನು ಪರೀಕ್ಷಿಸಿದರು. ನನ್ನ
ಮಹತ್ಕಾರ್ಯಗಳನ್ನು ನೋಡಿದ್ದರೂ ನನ್ನನ್ನು
ಪರೀಕ್ಷಿಸಿದರು.
10 ನಲವತ್ತು ವರ್ಷಗಳ ಕಾಲ ನಾನು ಅವರೊಂದಿಗೆ
ತಾಳ್ಮೆಯಿಂದಿದ್ದೆನು, ಅವರು ನಂಬಿಗಸ್ತರಲ್ಲವೆಂದು

ನನಗೆ ತಿಳಿದಿತ್ತು. ಅವರು ನನ್ನ ಉಪದೇಶಗಳನ್ನು ಅನುಸರಿಸಲಿಲ್ಲ.
11 ಆದ್ದರಿಂದ ನಾನು ಕೋಪಗೊಂಡು ನನ್ನ ವಿಶ್ರಾಂತಿಯ ನಾಡನ್ನು ಅವರು ಪ್ರವೇಶಿಸಕೂಡದೆಂದು ನಾನು ಪ್ರಮಾಣ ಮಾಡಿದೆನು.''

## ಕೀರ್ತನೆ96

1 ಯೆಹೋವನ ನೂತನ ಕಾರ್ಯಗಳ ಕುರಿತಾಗಿ ಹೊಸ ಹಾಡನ್ನು ಹಾಡಿರಿ! ಭೂಲೋಕವೆಲ್ಲಾ ಯೆಹೋವನನ್ನು ಹಾಡಿಕೊಂಡಾಡಲಿ.
2 ಯೆಹೋವನಿಗೆ ಹಾಡಿರಿ! ಆತನ ಹೆಸರನ್ನು ಸ್ತುತಿಸಿರಿ! ಶುಭವಾರ್ತೆಯನ್ನು ಹೇಳಿರಿ! ಆತನ ರಕ್ಷಣೆಯನ್ನು ಪ್ರತಿದಿನವೂ ಸಾರಿ ಹೇಳಿರಿ!
3 ಆತನ ಮಹಿಮೆಯನ್ನು ಜನಾಂಗಗಳಿಗೆ ಪ್ರಕಟಿಸಿರಿ. ಆತನ ಅಮೋಘ ಕಾರ್ಯಗಳ ಕುರಿತು ಜನರಿಗೆ ಸಾರಿ ಹೇಳಿರಿ.
4 ಯೆಹೋವನು ದೊಡ್ಡವನೂ ಸ್ತುತಿಗೆ ಯೋಗ್ಯನೂ ಆಗಿದ್ದಾನೆ. ಬೇರೆಲ್ಲ ದೇವರುಗಳಿಗಿಂತ ಆತನೇ ಭಯಂಕರನು.
5 ಅನ್ಯಜನಾಂಗಗಳ ದೇವರುಗಳೆಲ್ಲಾ ಕೇವಲ ಪ್ರತಿಮೆಗಳಾಗಿವೆ. ನಮ್ಮ ಯೆಹೋವನಾದರೋ ಆಕಾಶಮಂಡಲವನ್ನು ಸೃಷ್ಟಿಸಿದಾತನು.
6 ಆತನ ಎದುರಿನಲ್ಲಿ ಮಹಿಮೆಯೂ ವೈಭವವೂ ಕಂಗೊಳಿಸುತ್ತಿವೆ. ಆತನ ಪವಿತ್ರಾಲಯದಲ್ಲಿ ಶಕ್ತಿಯೂ ಸೌಂದರ್ಯವೂ ತುಂಬಿಕೊಂಡಿವೆ.
7 ಭೂಜನಾಂಗಗಳೇ, ಸ್ತುತಿಗೀತೆಗಳನ್ನು ಹಾಡುತ್ತಾ ಯೆಹೋವನನ್ನು ಮಹಿಮೆಪಡಿಸಿರಿ.
8 ಯೆಹೋವನ ಹೆಸರನ್ನು ಸ್ತುತಿಸಿರಿ. ನಿಮ್ಮ ಕಾಣಿಕೆಗಳನ್ನು ತೆಗೆದುಕೊಂಡು ದೇವಾಲಯಕ್ಕೆ ಹೋಗಿರಿ.
9 ಯೆಹೋವನನ್ನು ಆತನ ಸುಂದರವಾದ ಆಲಯದಲ್ಲಿ ಆರಾಧಿಸಿರಿ. ಭೂನಿವಾಸಿಗಳೆಲ್ಲರೇ, ಆತನನ್ನೇ ಆರಾಧಿಸಿರಿ.
10 ಯೆಹೋವನೇ ರಾಜನೆಂದು ಜನಾಂಗಗಳಿಗೆ ಪ್ರಕಟಿಸಿರಿ. ಭೂಮಿಯು ಸ್ಥಿರವಾಗಿರುವುದು. ಯೆಹೋವನೇ ನೀತಿಯಿಂದ ಅದನ್ನು ಆಳುವನು.
11 ಆಕಾಶಮಂಡಲವೇ, ಸಂತೋಷಪಡು! ಭೂಮಿಯೇ, ಉಲ್ಲಾಸಪಡು! ಸಮುದ್ರವೇ ಮತ್ತು ಸಮುದ್ರದೊಳಗಿರುವ ಸರ್ವಸ್ವವೇ, ಆನಂದಘೋಷ ಮಾಡಿರಿ!
12 ಹೊಲಗಳೇ ಮತ್ತು ಅವುಗಳ ಮೇಲೆ ಬೆಳೆದಿರುವ ಸಮಸ್ತವೇ, ಸಂತೋಷದಿಂದಿರಿ! ಅರಣ್ಯದ ಮರಗಳೇ, ಹಾಡಿರಿ ಮತ್ತು ಸಂತೋಷಪಡಿರಿ!
13 ಯಾಕಂದರೆ ಲೋಕವನ್ನು ಆಳಲು ಯೆಹೋವನು ಬರುತ್ತಿದ್ದಾನೆ. ಆತನು ಲೋಕವನ್ನು ನ್ಯಾಯನೀತಿಗಳಿಂದ ಆಳುವನು.

## ಕೀರ್ತನೆ97

1 ಯೆಹೋವನು ಆಳುತ್ತಿರುವನು! ಭೂಮಿಯು ಸಂತೋಷಿಸಲಿ. ದೂರದೇಶಗಳೆಲ್ಲಾ ಹರ್ಷಿಸಲಿ.
2 ಕಾರ್ಮೋಡಗಳು ಆತನನ್ನು ಕವಿದುಕೊಂಡಿವೆ. ನೀತಿಯೂ ನ್ಯಾಯವೂ ಆತನ ರಾಜ್ಯದ ಬಲವಾಗಿವೆ.
3 ಬೆಂಕಿಯು ಆತನ ಮುಂದೆ ಹೋಗಿ ಆತನ ಶತ್ರುಗಳನ್ನು ನಾಶಮಾಡುವುದು.
4 ಆತನ ಮಿಂಚು ಆಕಾಶದಲ್ಲಿ ಹೊಳೆಯುತ್ತದೆ. ಜನರು ಅದನ್ನು ನೋಡಿ ಭಯಗೊಂಡಿದ್ದಾರೆ.
5 ಯೆಹೋವನ ಎದುರಿನಲ್ಲಿ ಬೆಟ್ಟಗಳು ಮೇಣದಂತೆ ಕರಗಿಹೋಗುತ್ತವೆ. ಸಾರ್ವಭೌಮನ ಎದುರಿನಲ್ಲಿ ಅವು ಕರಗಿಹೋಗುತ್ತವೆ.
6 ಆಕಾಶಗಳೇ, ಆತನ ನೀತಿಯ ಕುರಿತು ಹೇಳಿರಿ! ದೇವರ ಮಹಿಮೆಯನ್ನು ಪ್ರತಿಯೊಬ್ಬನೂ ಕಾಣಲಿ!
7 ಜನರು ತಮ್ಮ ವಿಗ್ರಹಗಳನ್ನು ಪೂಜಿಸುವರು. ಅವರು ತಮ್ಮ ''ದೇವರುಗಳ'' ಬಗ್ಗೆ ಜಂಬಕೊಚ್ಚುವರು. ಆದರೆ ಅವರು ನಾಚಿಕೆಗೀಡಾಗುವರು. ಅವರ ''ದೇವರುಗಳು'' ಯೆಹೋವನಿಗೆ ಅಡ್ಡಬಿದ್ದು ಆರಾಧಿಸುತ್ತವೆ.
8 ಚೀಯೋನೇ, ಕೇಳಿ ಸಂತೋಷಪಡು! ಯೆಹೂದದ ಪಟ್ಟಣಗಳೇ, ಆನಂದಿಸಿರಿ. ಯಾಕಂದರೆ ಯೆಹೋವನ ತೀರ್ಪುಗಳು ನ್ಯಾಯವಾಗಿವೆ.
9 ಮಹೋನ್ನತನಾದ ಯೆಹೋವನೇ, ಭೂಲೋಕದ ಸರ್ವಾಧಿಪತಿ ನೀನೇ. ಎಲ್ಲಾ ದೇವರುಗಳಲ್ಲಿ ನೀನೇ ಮಹೋನ್ನತನು.
10 ಯೆಹೋವನನ್ನು ಪ್ರೀತಿಸುವವರೇ, ದುಷ್ಟತನವನ್ನು ದ್ವೇಷಿಸಿರಿ. ದೇವರು ತನ್ನ ಭಕ್ತರನ್ನು ಸಂರಕ್ಷಿಸುವನು. ದೇವರು ತನ್ನ ಸದ್ಭಕ್ತರನ್ನು ಕೆಡುಕರಿಂದ ರಕ್ಷಿಸುವನು.
11 ಬೆಳಕೂ ಸಂತೋಷವೂ ನೀತಿವಂತರ ಮೇಲೆ ಪ್ರಾಕಾಶಿಸುತ್ತವೆ.
12 ನೀತಿವಂತರೇ, ಯೆಹೋವನಲ್ಲಿ ಸಂತೋಷಪಡಿರಿ! ಆತನ ಪವಿತ್ರ ಹೆಸರನ್ನು ಸನ್ಮಾನಿಸಿರಿ!

## ಕೀರ್ತನೆ98

*ಸ್ತುತಿಗೀತೆ*

1 ಯೆಹೋವನಿಗೆ ಹೊಸಹಾಡನ್ನು ಹಾಡಿರಿ. ಆತನು ಅಮೋಘವಾದ ಕಾರ್ಯಗಳನ್ನು ಮಾಡಿದ್ದಾನೆ!
2 ಆತನ ಬಲಗೈಯೂ ಪರಿಶುದ್ಧ ಬಾಹುವೂ ಆತನಿಗೆ ಜಯವನ್ನು ಉಂಟುಮಾಡಿವೆ.

3 ಯೆಹೋವನು ತನ್ನ ರಕ್ಷಣಾಶಕ್ತಿಯನ್ನು ಜನಾಂಗ
ಗಳಿಗೆ ತೋರಿದನು. ಆತನು ತನ್ನ ನೀತಿಯನ್ನು ಅವರಿಗೆ
ಪ್ರಕಟಿಸಿದ್ದಾನೆ.
4 ಇಸ್ರೇಲರ ಕಡೆಗಿದ್ದ ಆತನ ಪ್ರೀತಿ ಸತ್ಯತೆಗಳನ್ನು ಆತನ
ಜನರು ಜ್ಞಾಪಿಸಿಕೊಂಡಿದ್ದಾರೆ. ದೂರದೇಶಗಳ
ಜನರು ನಮ್ಮ ದೇವರ ರಕ್ಷಣಾಶಕ್ತಿಯನ್ನು
ಕಂಡಿದ್ದಾರೆ.
5 ಭೂನಿವಾಸಿಗಳೆಲ್ಲರೇ, ಯೆಹೋವನಿಗೆ ಆನಂದ
ಘೋಷ ಮಾಡಿರಿ. ಆತನಿಗೆ ಸ್ತುತಿಗೀತೆಗಳನ್ನು
ಹಾಡಿರಿ!
6 ಹಾರ್ಪ್ ವಾದ್ಯಗಳೊಡನೆ, ಯೆಹೋವನನ್ನು
ಕೊಂಡಾಡಿರಿ. ಹಾರ್ಪ್‌ವಾದ್ಯಗಳನ್ನು ನುಡಿಸುತ್ತಾ
ಆತನನ್ನು ಸ್ತುತಿಸಿರಿ.
7 ತುತ್ತೂರಿಗಳನ್ನೂ ಕೊಂಬುಗಳನ್ನೂ ಊದಿರಿ. ನಮ್ಮ
ರಾಜನಾದ ಯೆಹೋವನಿಗೆ ಆನಂದಘೋಷ
ಮಾಡಿರಿ!
8 ಸಮುದ್ರವೂ ಭೂಮಿಯೂ ಅವುಗಳಲ್ಲಿರುವ
ಸಮಸ್ತವೂ ಗಟ್ಟಿಯಾಗಿ ಹಾಡಲಿ.
9 ನದಿಗಳೇ, ಚಪ್ಪಾಳೆ ತಟ್ಟಿರಿ ! ಬೆಟ್ಟಗಳೇ, ಒಟ್ಟಾಗಿ
ಹಾಡಿರಿ!
10 ಯೆಹೋವನ ಎದುರಿನಲ್ಲಿ ಹಾಡಿರಿ, ಯಾಕಂದರೆ
ಆತನು ಭೂಲೋಕವನ್ನು ಆಳಲು* ಬರುತ್ತಿದ್ದಾನೆ.
ಆತನು ಪ್ರಪಂಚವನ್ನು ನ್ಯಾಯವಾಗಿ ಆಳುತ್ತಾನೆ.
ಆತನು ಜನರನ್ನು ನೀತಿಯಿಂದ ಆಳುತ್ತಾನೆ.

## ಕೀರ್ತನೆ 99

1 ಯೆಹೋವನೇ ರಾಜನು! ಜನಾಂಗಗಳು ಭಯದಿಂದ
ನಡುಗಲಿ. ಆತನು ಕೆರೂಬಿಗಳ ಮೇಲೆ ರಾಜನಂತೆ
ಕುಳಿತುಕೊಂಡಿದ್ದಾನೆ. ಭೂಮಿಯು ಭಯದಿಂದ
ನಡುಗಲಿ.
2 ಚೀಯೋನಿನ ಯೆಹೋವನು ದೊಡ್ಡವನು! ಆತನು
ಜನಾಂಗಗಳಿಗೆಲ್ಲಾ ಮಹಾನಾಯಕನಾಗಿದ್ದಾನೆ.
3 ಅವರೆಲ್ಲರೂ ನಿನ್ನ ಭಯಂಕರವಾದ ಹೆಸರನ್ನು
ಕೊಂಡಾಡಲಿ. ಆತನೇ ಪರಿಶುದ್ಧನು.
4 ಶಕ್ತಿಪೂರ್ಣನಾದ ರಾಜನು ನ್ಯಾಯವನ್ನು ಪ್ರೀತಿಸು
ವನು. ದೇವರೇ, ನೀತಿಯನ್ನು ಸೃಷ್ಟಿಸಿದಾತನು ನೀನೇ.
ಯಾಕೋಬ್ಯರಲ್ಲಿ ನ್ಯಾಯನೀತಿಗಳನ್ನು ಸ್ಥಾಪಿಸಿ
ದವನು ನೀನೇ.
5 ನಮ್ಮ ದೇವರಾದ ಯೆಹೋವನನ್ನು ಕೊಂಡಾಡಿರಿ,
ಆತನ ಪವಿತ್ರ ಪಾದಪೀಠಕ್ಕೆ* ಅಡ್ಡಬೀಳಿರಿ.
6 ಮೋಶೆಯೂ ಆರೋನನೂ ದೇವರ ಯಾಜಕರು
ಗಳಾಗಿದ್ದರು. ಸಮುವೇಲನೂ ಆತನ ಹೆಸರಿನಲ್ಲಿ
ಪ್ರಾರ್ಥಿಸಿದನು. ಆತನು ಅವರೆಲ್ಲರ ಪ್ರಾರ್ಥನೆಗಳಿಗೆ
ಉತ್ತರಿಸಿದನು.
7 ಆತನು ಮೇಘಸ್ತಂಭದಿಂದ ಅವರೊಂದಿಗೆ ಮಾತಾಡಿ
ದನು. ಅವರು ಆಜ್ಞೆಗಳಿಗೆ ವಿಧೇಯರಾದರು. ಆತನು
ಅವರಿಗೆ ಧರ್ಮಶಾಸ್ತ್ರವನ್ನು ಕೊಟ್ಟನು.
8 ನಮ್ಮ ದೇವರಾದ ಯೆಹೋವನೇ, ನೀನು ಅವರ
ಪ್ರಾರ್ಥನೆಗಳಿಗೆ ಉತ್ತರಿಸಿದೆ. ನೀನು ಕ್ಷಮಿಸುವ ದೇವ
ರೆಂದೂ ದುಷ್ಕೃತ್ಯಗಳಿಗೆ ದಂಡಿಸುವವನೆಂದೂ ಅವರಿಗೆ
ತೋರ್ಪಡಿಸಿದೆ.
9 ನಮ್ಮ ದೇವರಾದ ಯೆಹೋವನನ್ನು ಕೊಂಡಾಡಿರಿ.
ಆತನ ಪವಿತ್ರ ಪರ್ವತದ ಕಡೆಗೆ ಅಡ್ಡಬಿದ್ದು ಆತನನ್ನು
ಆರಾಧಿಸಿರಿ. ನಮ್ಮ ದೇವರಾದ ಯೆಹೋವನೇ
ಪರಿಶುದ್ಧನು!

## ಕೀರ್ತನೆ 100

*ಕೃತಜ್ಞತಾಸ್ತುತಿಗೀತೆ*

1 ಸಮಸ್ತ ಭೂನಿವಾಸಿಗಳೇ, ಯೆಹೋವನಿಗೆ ಗಾಯನ
ಮಾಡಿರಿ!
2 ಯೆಹೋವನ ಸೇವೆಯನ್ನು ಸಂತೋಷದಿಂದ
ಮಾಡಿರಿ; ಹರ್ಷಗೀತೆಗಳೊಡನೆ ಆತನ ಸನ್ನಿಧಿಗೆ
ಬನ್ನಿರಿ!
3 ಯೆಹೋವನೇ ದೇವರೆಂದು ತಿಳಿದುಕೊಳ್ಳಿರಿ.
ನಮ್ಮನ್ನು ಸೃಷ್ಟಿಸಿದವನು ಆತನೇ. ನಾವು ಆತನ
ಪ್ರಜೆಯೂ ಮಂದೆಯೂ ಆಗಿದ್ದೇವೆ.
4 ಕೃತಜ್ಞತಾಗೀತೆಗಳೊಡನೆ ಆತನ ಪಟ್ಟಣಕ್ಕೆ ಬನ್ನಿರಿ.
ಸ್ತುತಿಗೀತೆಗಳೊಡನೆ ಆತನ ಆಲಯಕ್ಕೆ ಬನ್ನಿರಿ.
ಆತನನ್ನು ಸನ್ಮಾನಿಸುತ್ತಾ ಆತನ ಹೆಸರನ್ನು
ಕೊಂಡಾಡಿರಿ.
5 ಯೆಹೋವನು ಒಳ್ಳೆಯವನು! ಆತನ ಪ್ರೀತಿಯು
ಶಾಶ್ವತವಾದದ್ದು, ಆತನ ನಂಬಿಗಸ್ತಿಕೆಯು ನಿರಂತರ
ವಾದದ್ದು.

## ಕೀರ್ತನೆ 101

*ರಚನೆಗಾರ: ದಾವೀದ*

1 ಆತನ ಪ್ರೀತಿಯನ್ನೂ ನೀತಿಯನ್ನೂ ಹಾಡಿಹರಸು
ವೆನು. ಯೆಹೋವನೇ, ನಿನಗೆ ಗಾಯನ ಮಾಡುವೆನು.
2 ನಾನು ಎಚ್ಚರಿಕೆಯಿಂದ ಪರಿಶುದ್ಧನಾಗಿ ಜೀವಿಸು
ವೆನು; ನನ್ನ ಮನೆಯಲ್ಲೂ ಪರಿಶುದ್ಧನಾಗಿರುವೆನು.
ನೀನು ನನ್ನ ಬಳಿಗೆ ಬರುವುದು ಯಾವಾಗ?
3 ನನ್ನ ಎದುರಿನಲ್ಲಿ ಯಾವ ವಿಗ್ರಹಗಳೂ ಇಲ್ಲ. ನಿನಗೆ
ದ್ರೋಹಮಾಡುವವರು ನನಗೆ ಅಸಹ್ಯ. ನಾನು
ಅವರಂತೆ ಮಾಡುವುದಿಲ್ಲ!
4 ನಾನು ನಿನಗೆ ಯಥಾರ್ಥನಾಗಿರುವೆನು; ದುಷ್ಟ
ಕಾರ್ಯಗಳನ್ನು ಮಾಡುವುದಿಲ್ಲ .

---

**ಆಳಲು** ಅಥವಾ ನ್ಯಾಯತೀರಿಸಲು.

**ಪಾದಪೀಠ** ಬಹುಶಃ, ಇದು ದೇವಾಲಯವನ್ನು ಸೂಚಿಸುತ್ತದೆ.

5 ನೆರೆಯವನ ಕುರಿತು ಗುಟ್ಟಾಗಿ ಚಾಡಿ ಹೇಳುವವನನ್ನು ನಾನು ತಡೆಯುವೆನು. ಗರ್ವಪಡುವುದಕ್ಕಾಗಲೀ ತಮ್ಮನ್ನೇ ಉತ್ತಮರೆಂದು ಭಾವಿಸಿಕೊಳ್ಳುವುದಕ್ಕಾಗಲೀ ನಾನು ಅವರಿಗೆ ಅವಕಾಶಕೊಡುವುದಿಲ್ಲ.
6 ನಂಬಿಗಸ್ತರಿಗಾಗಿ ದೇಶದಲ್ಲೆಲ್ಲಾ ಹುಡುಕಿ ನೋಡುತ್ತೇನೆ. ನನ್ನ ಸೇವಗೆ ಅವರನ್ನೇ ನೇಮಿಸಿಕೊಳ್ಳುವೆನು. ಪರಿಶುದ್ಧರು ಮಾತ್ರ ನನ್ನ ಸೇವಕರಾಗಿರಲು ಸಾಧ್ಯ.
7 ನನ್ನ ಮನೆಯಲ್ಲಿ ವಾಸಿಸುವ ಸುಳ್ಳುಗಾರರಿಗೆ ಅವಕಾಶ ಕೊಡುವುದಿಲ್ಲ. ನನ್ನ ಸಮೀಪದಲ್ಲಿ ಇರುವುದಕ್ಕೂ ನಾನು ಅವರಿಗೆ ಆಸ್ಪದ ಕೊಡುವುದಿಲ್ಲ.
8 ಈ ದೇಶದಲ್ಲಿರುವ ದುಷ್ಟರನ್ನು ನಾನು ನಾಶಮಾಡುತ್ತೇನೆ. ಯೆಹೋವನ ಪಟ್ಟಣದಿಂದ ಕೆಡುಕರನ್ನು ಓಡಿಸುತ್ತೇನೆ.

## ಕೀರ್ತನೆ 102

*ಹಿಂಸೆ ಸಂಕಟಗಳಲ್ಲಿರುವವನ ಪ್ರಾರ್ಥನೆ*

1 ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳು. ಸಹಾಯಕ್ಕಾಗಿ ನಾನಿಡುವ ಮೊರೆಯನ್ನು ಲಾಲಿಸು.
2 ಯೆಹೋವನೇ, ನಾನು ಆಪತ್ತುಗಳಲ್ಲಿರುವಾಗ ನನಗೆ ವಿಮುಖನಾಗಬೇಡ, ನನಗೆ ಕಿವಿಗೊಡು. ಸಹಾಯಕ್ಕಾಗಿ ಮೊರೆಯಿಡುವಾಗ ಬೇಗನೆ ಸದುತ್ತರವನ್ನು ದಯಪಾಲಿಸು.
3 ನನ್ನ ಜೀವಮಾನವು ಹೊಗೆಯಂತೆ ಕಣ್ಮರೆಯಾಗುತ್ತಿದೆ. ನನ್ನ ಜೀವಿತವು ನಂದಿಹೋಗುತ್ತಿರುವ ಬೆಂಕಿಯಂತಿದೆ.
4 ನಾನು ನಿರ್ಬಲನಾಗಿ ಒಣಗಿ ಹೋಗುತ್ತಿರುವ ಹುಲ್ಲಿನಂತಿದ್ದೇನೆ. ನಾನು ಊಟವನ್ನೂ ಮರೆತುಬಿಡುವೆನು.
5 ದುಃಖದಿಂದ ಕ್ಷೀಣನಾಗುತ್ತಿದ್ದೇನೆ.
6 ಅರಣ್ಯದಲ್ಲಿರುವ ಗೂಬೆಯಂತೆ ಒಬ್ಬಂಟಿಗನಾಗಿದ್ದೇನೆ. ಪಾಳುಬಿದ್ದ ಕಟ್ಟಡಗಳಲ್ಲಿರುವ ಗೂಬೆಯಂತೆ ನಾನು ಒಬ್ಬಂಟಿಗನಾಗಿದ್ದೇನೆ.
7 ನನಗೆ ನಿದ್ರೆಯೂಬಾರದು. ಮೇಲ್ಛಾವಣಿಗೆಯ ಮೇಲಿರುವ ಏಕಾಂಗಿಯಾದ ಪಕ್ಷಿಯಂತೆ ನಾನಿದ್ದೇನೆ.
8 ನನ್ನ ವೈರಿಗಳು ನನಗೆ ಅವಮಾನ ಮಾಡುತ್ತಲೇ ಇರುವರು. ಅವರು ನನ್ನನ್ನು ದೃಷ್ಟಾಂತಮಾಡಿ ಶಪಿಸುವರು.
9 ನನ್ನ ದುಃಖವೇ ನನಗೆ ಆಹಾರವಾಯಿತು. ಕಣ್ಣೀರು ನನ್ನ ಪಾನೀಯದೊಳಗೆ ತೊಟ್ಟಿಕ್ಕುತ್ತಿದೆ.
10 ನೀನು ನನ್ನ ಮೇಲೆ ಕೋಪಗೊಂಡಿರುವುದೇ ಅದಕ್ಕೆ ಕಾರಣ. ನೀನು ನನ್ನನ್ನು ಮೇಲೆತ್ತಿ ಎಸೆದುಬಿಟ್ಟೆಯಲ್ಲಾ!
11 ನನ್ನ ಜೀವಮಾನವು ಸಂಜೆಯ ನೆರಳಿನಂತೆ ಕೊನೆಗೊಂಡಿದೆ. ನಾನು ಒಣಗಿ ಸಾಯುತ್ತಿರುವ ಹುಲ್ಲಿನಂತಿದ್ದೇನೆ.
12 ಯೆಹೋವನೇ, ನೀನಾದರೊ ಎಂದೆಂದಿಗೂ ಜೀವಿಸುವೆ! ನಿನ್ನ ಹೆಸರು ಶಾಶ್ವತವಾದದ್ದು!
13 ನೀನು ಎದ್ದು ಚೀಯೋನನ್ನು ಸಂತೈಸುವೆ. ನೀನು ಚೀಯೋನಿಗೆ ದಯೆತೋರುವ ಕಾಲ ಬರುತ್ತಿದೆ.
14 ನಿನ್ನ ಸೇವಕರು ಆಕೆಯ (ಜೆರುಸಲೇಮಿನ) ಕಲ್ಲುಗಳನ್ನು ಪ್ರೀತಿಸುವರು. ಅವರು ಆ ಪಟ್ಟಣದ ಧೂಳನ್ನು ಇಷ್ಟಪಡುವರು!
15 ಜನರು ಯೆಹೋವನ ಹೆಸರನ್ನು ಆರಾಧಿಸುತ್ತಾರೆ. ದೇವರೇ, ಭೂರಾಜರುಗಳೆಲ್ಲಾ ನಿನ್ನನ್ನು ಸನ್ಮಾನಿಸುವರು.
16 ಯಾಕಂದರೆ, ಯೆಹೋವನು ಚೀಯೋನನ್ನು ಮತ್ತೆ ಕಟ್ಟುವನು. ಜನಾಂಗಗಳು ಆಕೆಯ (ಜೆರುಸಲೇಮಿನ) ವೈಭವವನ್ನು ಮತ್ತೆ ನೋಡುವರು.
17 ಆತನು ನಿರ್ಗತಿಕರ ಪ್ರಾರ್ಥನೆಗಳಿಗೆ ಉತ್ತರ ಕೊಡುವನು. ಅವರ ಮೊರೆಗಳನ್ನು ಆತನು ತಿರಸ್ಕರಿಸುವುದಿಲ್ಲ.
18 ಮುಂದಿನ ತಲೆಮಾರುಗಳವರಿಗಾಗಿ ಇವುಗಳನ್ನು ಬರೆದಿಡಿ. ಮುಂದಿನ ಕಾಲದಲ್ಲಿ ಅವರು ಯೆಹೋವನನ್ನು ಸ್ತುತಿಸುತ್ತಾರೆ.
19 ಯೆಹೋವನು ಉನ್ನತದಲ್ಲಿರುವ ತನ್ನ ಪರಿಶುದ್ಧ ಸ್ಥಳದಿಂದ ಕೆಳಗೆ ನೋಡುತ್ತಾನೆ. ಆತನು ಪರಲೋಕದಿಂದ ಭೂಮಿಯನ್ನು ನೋಡುತ್ತಾನೆ.
20 ಆತನು ಸೆರೆಯಾಳುಗಳ ಪ್ರಾರ್ಥನೆಗಳನ್ನು ಕೇಳುತ್ತಾನೆ. ಮರಣದಂಡನೆಗೆ ಒಳಗಾದವರನ್ನು ಆತನು ಬಿಡಿಸುತ್ತಾನೆ.
21 ಆಗ ಚೀಯೋನಿನಲ್ಲಿರುವ ಜನರು ಯೆಹೋವನ ಕುರಿತು ಪ್ರಕಟಿಸುವರು: ಅವರು ಆತನ ಹೆಸರನ್ನು ಜೆರುಸಲೇಮಿನಲ್ಲಿ ಸ್ತುತಿಸುವರು.
22 ಜನಾಂಗಗಳು ಒಟ್ಟುಗೂಡಿ ಬರುವವು. ರಾಜ್ಯಗಳು ಯೆಹೋವನ ಸೇವೆಮಾಡಲು ಬರುವವು.
23 ನನ್ನ ಬಲವು ಕುಂದಿಹೋಯಿತು. ನನ್ನ ಆಯುಷ್ಕಾಲವು ಕಡಿಮೆಯಾಯಿತು.
24 ಆದ್ದರಿಂದ ನಾನು ಇಂತೆಂದೆನು: ‘‘ಯೌವನಸ್ಥನಾಗಿರುವಾಗಲೇ ನನ್ನನ್ನು ಸಾಯಿಸಬೇಡ. ದೇವರೇ, ನೀನು ಶಾಶ್ವತವಾಗಿ ಜೀವಿಸುವೆ!
25 ಬಹುಕಾಲದ ಹಿಂದೆ, ನೀನು ಪ್ರಪಂಚವನ್ನು ಸೃಷ್ಟಿಮಾಡಿದೆ. ನೀನು ಆಕಾಶವನ್ನು ನಿನ್ನ ಕೈಗಳಿಂದ ನಿರ್ಮಿಸಿದೆ!
26 ಲೋಕವೂ ಆಕಾಶವೂ ಕೊನೆಗೊಳ್ಳುತ್ತವೆ. ನೀನಾದರೊ ಶಾಶ್ವತವಾಗಿರುವೆ! ಅವು ಬಟ್ಟೆಗಳಂತೆ ಹಳೆಯದಾಗುತ್ತವೆ. ನೀನು ಅವುಗಳನ್ನು ಉಡುಪುಗಳಂತೆ ಬದಲಾಯಿಸುವೆ. ಅವುಗಳೆಲ್ಲಾ ಬದಲಾಗುತ್ತವೆ.

27 ದೇವರೇ, ನೀನಾದರೊ ಎಂದಿಗೂ ಬದಲಾಗು ವುದಿಲ್ಲ. ನೀನು ಎಂದೆಂದಿಗೂ ಜೀವಿಸುವೆ!
28 ನಾವು ನಿನ್ನ ಸೇವಕರಾಗಿದ್ದೇವೆ. ಇಲ್ಲಿ ನಮ್ಮ ಮಕ್ಕಳು ವಾಸವಾಗಿರುತ್ತಾರೆ; ಅವರ ಸಂತತಿಗಳವರೂ ನಿನ್ನನ್ನು ಆರಾಧಿಸಲು ಇಲ್ಲಿರುತ್ತಾರೆ.''

## ಕೀರ್ತನೆ 103

*ರಚನೆಗಾರ; ದಾವೀದ*

1 ನನ್ನ ಆತ್ಮವೇ, ಯೆಹೋವನನ್ನು ಕೊಂಡಾಡು! ನನ್ನ ಸರ್ವಾಂಗಗಳೇ, ಆತನ ಪವಿತ್ರ ಹೆಸರನ್ನು ಕೊಂಡಾಡಿರಿ!
2 ನನ್ನ ಆತ್ಮವೇ, ಯೆಹೋವನನ್ನು ಕೊಂಡಾಡು! ಆತನ ಉಪಕಾರಗಳಲ್ಲಿ ಒಂದನ್ನೂ ಮರೆಯಬೇಡಿ.
3 ಆತನು ನಮ್ಮೆಲ್ಲರ ಪಾಪಗಳನ್ನು ಕ್ಷಮಿಸುವನು; ನಮ್ಮ ಕಾಯಿಲೆಗಳನ್ನೆಲ್ಲಾ ವಾಸಿಮಾಡುವನು.
4 ಆತನು ನಮ್ಮ ಜೀವವನ್ನು ನಾಶನದಿಂದ ರಕ್ಷಿಸಿ ನಮಗೆ ಪ್ರೀತಿಯನ್ನೂ ಕನಿಕರವನ್ನೂ ತೋರುವನು.
5 ಆತನು ನಮಗೆ ಸುವರಗಳನ್ನು ಹೇರಳವಾಗಿ ದಯ ಪಾಲಿಸುವನು. ಹದ್ದಿಗೆ ಬರುವಂತೆಯೇ ನಮಗೆ ಯೌವನವನ್ನು ಬರಮಾಡುತ್ತಾನೆ.
6 ಯೆಹೋವನು ನೀತಿವಂತನಾಗಿದ್ದಾನೆ. ಕುಗ್ಗಿಹೋದ ವರಿಗೆ ಆತನು ನ್ಯಾಯ ದೊರಕಿಸುವನು.
7 ಆತನು ತನ್ನ ಕಟ್ಟಳೆಗಳನ್ನು ಮೋಶೆಗೆ ಉಪ ದೇಶಿಸಿದನು; ತನ್ನ ಮಹತ್ಕಾರ್ಯಗಳನ್ನು ಇಸ್ರೇಲರಿಗೆ ತೋರಿಸಿದನು.
8 ಯೆಹೋವನು ಕನಿಕರವುಳ್ಳವನೂ ಕೃಪಾಪೂರ್ಣನೂ ತಾಳ್ಮೆಯುಳ್ಳವನೂ ಪ್ರೀತಿಪೂರ್ಣನೂ ಆಗಿದ್ದಾನೆ.
9 ಆತನು ಯಾವಾಗಲೂ ಟೀಕಿಸುವವನಲ್ಲ. ಆತನು ನಮ್ಮ ಮೇಲೆ ನಿತ್ಯವೂ ಕೋಪವಾಗಿರುವವನಲ್ಲ.
10 ನಾವು ದೇವರಿಗೆ ವಿರೋಧವಾಗಿ ಪಾಪಮಾಡಿದೆವು. ಆದರೂ ತಕ್ಕ ದಂಡನೆಯನ್ನು ಆತನು ನಮಗೆ ಕೊಡಲಿಲ್ಲ.
11 ಭೂಮಿಯ ಮೇಲೆ ಆಕಾಶವು ಎಷ್ಟು ಉನ್ನತ ವಾಗಿದೆಯೋ ಆತನ ಮಹಾಪ್ರೀತಿಯು ಆತನ ಭಕ್ತರ ಮೇಲೆ ಅಷ್ಟೇ ಅಪಾರವಾಗಿದೆ.
12 ಪೂರ್ವಕ್ಕೂ ಪಶ್ಚಿಮಕ್ಕೂ ಎಷ್ಟೋ ದೂರವಿರುವಂತೆ ನಮ್ಮ ಪಾಪಗಳನ್ನು ನಮ್ಮಿಂದ ತೆಗೆದು ದೂರ ಮಾಡಿದ್ದಾನೆ.
13 ತಂದೆಯು ಮಕ್ಕಳನ್ನು ಕನಿಕರಿಸುವಂತೆ ಯೆಹೋವನು ತನ್ನ ಭಕ್ತರನ್ನು ಕನಿಕರಿಸುವನು.
14 ಆತನು ನಮ್ಮನ್ನು ಸಂಪೂರ್ಣವಾಗಿ ಬಲ್ಲನು. ನಾವು ಮಣ್ಣಿನಿಂದ ನಿರ್ಮಾಣಗೊಂಡದ್ದೂ ಆತನಿಗೆ ತಿಳಿದಿದೆ.
15 ನಮ್ಮ ಜೀವಮಾನಗಳು ಕೊಂಚವೆಂಬುದು ಆತನಿಗೆ ಗೊತ್ತಿದೆ. ನಮ್ಮ ಜೀವಮಾನಗಳು ಹುಲ್ಲಿನಂತಿವೆ ಎಂಬುದೂ ಆತನಿಗೆ ತಿಳಿದಿದೆ.
16 ನಾವು ಅಡವಿಯ ಚಿಕ್ಕ ಹೂವಿನಂತಿದ್ದೇವೆ ಎಂಬುದು ಆತನಿಗೆ ಗೊತ್ತಿದೆ. ನಮ್ಮ ಹೂವು ಬೇಗನೆ ಬೆಳೆದರೂ ಬಿಸಿಗಾಳಿ ಬೀಸಿದಾಗ ಒಣಗಿ ಹೋಗುವುದು. ಬಳಿಕ, ಅದು ಬೆಳೆದ ಸ್ಥಳವನ್ನೂ ಗುರುತಿಸಲಾಗದು.
17 ಆದರೆ ಯೆಹೋವನು ತನ್ನ ಭಕ್ತರನ್ನು ಪ್ರೀತಿಸುತ್ತಲೇ ಬಂದನು. ಇನ್ನು ಮುಂದೆಯೂ ಪ್ರೀತಿಸುತ್ತಲೇ ಇರುವನು. ಆತನು ಅವರ ಮಕ್ಕಳಿಗೂ ಮೊಮ್ಮಕ್ಕ ಳಿಗೂ ಒಳ್ಳೆಯವನಾಗಿರುವನು.
18 ಆತನ ಒಡಂಬಡಿಕೆಗೆ ವಿಧೇಯರಾಗುವ ಜನರಿಗೆ ಆತನು ಒಳ್ಳೆಯವನಾಗಿದ್ದಾನೆ. ಆತನ ಆಜ್ಞೆಗಳಿಗೆ ವಿಧೇಯರಾಗುವ ಜನರಿಗೆ ಆತನು ಒಳ್ಳೆಯವ ನಾಗಿದ್ದಾನೆ.

19 ಯೆಹೋವನ ಸಿಂಹಾಸನವು ಪರಲೋಕದಲ್ಲಿದೆ. ಆತನು ಸಮಸ್ತವನ್ನು ಆಳುವನು.
20 ದೇವದೂತರೇ, ಆತನ ಮಾತಿಗೆ ಕಿವಿಗೊಡುವವರೇ, ಆತನ ಆಜ್ಞೆಗಳಿಗೆ ವಿಧೇಯರಾಗುವ ಬಲಿಷ್ಠ ಸೈನಿ ಕರೇ, ಯೆಹೋವನನ್ನು ಕೊಂಡಾಡಿರಿ.
21 ಆತನ ಸೈನ್ಯಗಳೇ*, ಚಿತ್ತವನ್ನು ನೇರವೇರಿಸುವ ಸೇವ ಕರೇ, ಯೆಹೋವನನ್ನು ಕೊಂಡಾಡಿರಿ.
22 ಸರ್ವಸ್ಥಳಗಳಲ್ಲಿರುವ ಸಮಸ್ತವನ್ನು ಸೃಷ್ಟಿಸಿದಾತನು ಯೆಹೋವನೇ ಸರ್ವಸ್ಥಳಗಳಲ್ಲಿರುವ ಸಮಸ್ತಕ್ಕೂ ದೇವರೇ ಅದಿಪತಿ. ಅವುಗಳೆಲ್ಲಾ ಆತನನ್ನು ಕೊಂಡಾ ಡಲಿ! ನನ್ನ ಆತ್ಮವೇ, ಯೆಹೋವನನ್ನು ಕೊಂಡಾಡು!

## ಕೀರ್ತನೆ 104

1 ನನ್ನ ಆತ್ಮವೇ, ಯೆಹೋವನನ್ನು ಕೊಂಡಾಡು! ಯೆಹೋವನೇ, ನನ್ನ ದೇವರೇ, ನೀನು ಬಹಳ ದೊಡ್ಡ ವನು! ನೀನು ಮಹಿಮೆಯನ್ನೂ ಘನತೆಯನ್ನೂ ಧರಿಸಿ ಕೊಂಡಿರುವೆ.
2 ನೀನು ಬೆಳಕನ್ನು ನಿಲುವಂಗಿಯಂತೆ ಧರಿಸಿ ಕೊಂಡಿರುವೆ ನೀನು ಆಕಾಶಮಂಡಲವನ್ನು ಪರದೆ ಯಂತೆ ಹರಡಿರುವೆ.
3 ನಿನ್ನ ಮನೆಯನ್ನು ಅವುಗಳ ಮೇಲೆ ಕಟ್ಟಿರುವೆ. ದಟ್ಟ ವಾದ ಮೋಡಗಳನ್ನು ರಥಗಳನ್ನಾಗಿ ಮಾಡಿಕೊಂಡು ಗಾಳಿಯ ರೆಕ್ಕೆಗಳ ಮೇಲೆ ಆಕಾಶದಲ್ಲಿ ಸಂಚರಿಸುವೆ.

---

**ಸೈನ್ಯಗಳೇ** ಈ ಪದ, ''ಸೈನ್ಯಗಳು,'' ''ದೇವದೂತರು,'' ಅಥವಾ ''ನಕ್ಷತ್ರ ಗಳು ಮತ್ತು ಗ್ರಹಗಳು'' ಎಂಬರ್ಥಗಳನ್ನು ಕೊಡುತ್ತದೆ.

4 ಗಾಳಿಯನ್ನು ನಿನ್ನ ದೂತರನ್ನಾಗಿಯೂ ಬೆಂಕಿಯನ್ನು
ನಿನ್ನ ಸೇವಕರನ್ನಾಗಿಯೂ ಮಾಡಿರುವೆ.*
5 ಭೂಮಿಯನ್ನು ನೀನು ಅಸ್ತಿವಾರದ ಮೇಲೆ ಕಟ್ಟಿರುವು
ದರಿಂದ ಅದೆಂದಿಗೂ ನಾಶವಾಗದು.
6 ನೀನು ಭೂಮಿಗೆ ನೀರನ್ನು ಕಂಬಳಿಯಂತೆ ಹೊದಿಸಿ
ರುವೆ. ಅದು ಬೆಟ್ಟಗಳನ್ನು ಮುಚ್ಚಿಕೊಂಡಿತು.
7 ನೀನು ಆಜ್ಞಾಪಿಸಲು ಅದು ಓಡಿಹೋಯಿತು.
ದೇವರೇ, ನೀನು ನೀರಿನತ್ತ ಘರ್ಜಿಸಲು ಅದು ಓಡಿ
ಹೋಯಿತು.
8 ಜಲರಾಶಿಗಳು ಬೆಟ್ಟಗಳಿಂದ ಇಳಿದು ಕಣಿವೆಗಳಿಗೂ
ನೀನು ಗೊತ್ತುಪಡಿಸಿದ ಸ್ಥಳಗಳಿಗೂ ಹರಿದು
ಹೋದವು.
9 ನೀನು ಸಮುದ್ರಗಳಿಗೆ ಮೇರೆಗಳನ್ನು ಗೊತ್ತುಪಡಿಸಿ
ರುವುದರಿಂದ ನೀರಿನಿಂದ ಭೂಮಿಯು ಮತ್ತೆಂದಿಗೂ
ಆವೃತವಾಗದು.
10 ನೀನು ನೀರನ್ನು ಬುಗ್ಗೆಗಳಿಂದ ತೊರೆಗಳಿಗೆ ಹರಿಯ
ಮಾಡುವೆ. ಬೆಟ್ಟದ ತೊರೆಗಳ ಮೂಲಕ ನೀರು
ಹರಿದು ಹೋಗುವುದು.
11 ತೊರೆಗಳು ಎಲ್ಲಾ ಕಾಡುಪ್ರಾಣಿಗಳಿಗೆ ನೀರನ್ನು
ಕೊಡುತ್ತವೆ. ಕಾಡುಕತ್ತೆಗಳು ಸಹ ನೀರಿಗಾಗಿ ಅಲ್ಲಿಗೆ
ಬರುತ್ತವೆ.
12 ಕಾಡುಪಕ್ಷಿಗಳು ಬಂದು ನೀರಿನ ಹಳ್ಳಗಳ ಬಳಿಯಲ್ಲಿ
ವಾಸಿಸುತ್ತವೆ. ಸಮೀಪದ ಮರಗಳ ಕೊಂಬೆಗಳಲ್ಲಿ
ವಾಸವಾಗಿದ್ದು ಗಾನಮಾಡುತ್ತವೆ.
13 ಆತನು ಬೆಟ್ಟಗಳ ಮೇಲೆ ಮಳೆಯನ್ನು ಸುರಿಸುವನು.
ಆತನ ಸೃಷ್ಟಿಗಳು ಭೂಮಿಗೆ ಅಗತ್ಯವಾದ ಪ್ರತಿ
ಯೊಂದನ್ನೂ ಒದಗಿಸುತ್ತವೆ.
14 ನೀನು ಪಶುಗಳಿಗೋಸ್ಕರ ಹುಲ್ಲನ್ನು ಬೆಳೆಯ
ಮಾಡುವೆ. ನಾವು ದುಡಿದು ಬೆಳೆಸುವುದಕ್ಕಾಗಿ ಸಸಿ
ಗಳನ್ನು ಕೊಟ್ಟಿರುವೆ. ಅವು ಬೆಳೆದು ನಮಗೆ
ಆಹಾರವನ್ನು ಒದಗಿಸುತ್ತವೆ.
15 ನಮ್ಮನ್ನು ಸಂತೋಷಪಡಿಸುವ ದ್ರಾಕ್ಷಾರಸವನ್ನೂ
ನಮ್ಮ ಚರ್ಮವನ್ನು ಮೃದುಗೊಳಿಸುವ* ಎಣ್ಣೆ
ಯನ್ನೂ ನಮ್ಮನ್ನು ಬಲಗೊಳಿಸುವ ಆಹಾರವನ್ನೂ
ನಮಗೆ ದೇವರು ಕೊಡುತ್ತಾನೆ.
16 ಲೆಬನೋನಿನ ದೇವದಾರು ವೃಕ್ಷಗಳು ಯೆಹೋವ
ನವೇ, ಅವುಗಳನ್ನು ನೆಟ್ಟಾತನು ಯೆಹೋವನೇ.
ಆತನೇ ಅವುಗಳಿಗೆ ಬೇಕಾದ ನೀರನ್ನು ಒದಗಿಸುವನು.
17 ಪಕ್ಷಿಗಳು ಗೂಡುಗಳನ್ನು ಆ ಮರಗಳಲ್ಲಿ ಕಟ್ಟಿ
ಕೊಳ್ಳುತ್ತವೆ. ದೊಡ್ಡ ಕೊಕ್ಕರೆಗಳು ತುರಾಯಿ
ಮರಗಳಲ್ಲಿ ಜೀವಿಸುತ್ತವೆ.
18 ಎತ್ತರವಾದ ಬೆಟ್ಟಗಳು ಜಿಂಕೆಗಳಿಗೆ ವಾಸಸ್ಥಳವಾಗಿವೆ.
ದೊಡ್ಡ ಬಂಡೆಗಳು ಬೆಟ್ಟದ ಮೊಲಗಳಿಗೆ ಆಶ್ರಯ
ಸ್ಥಾನಗಳಾಗಿವೆ.
19 ವಿಶೇಷಕಾಲಗಳ ಸೂಚನೆಗಾಗಿ ನೀನು ನಮಗೆ ಚಂದ್ರ
ನನ್ನು ಕೊಟ್ಟಿರುವೆ. ಸೂರ್ಯನಿಗೆ ತಾನು ಮುಳುಗತಕ್ಕ
ಸಮಯವು ಯಾವಾಗಲೂ ತಿಳಿದಿದೆ.
20 ನೀನು ಕತ್ತಲೆಯನ್ನು ರಾತ್ರಿಯನ್ನಾಗಿ ಮಾಡಿದೆ.
ಕಾಡು ಪ್ರಾಣಿಗಳು ರಾತ್ರಿಯಲ್ಲಿ ಹೊರಬಂದು ಸುತ್ತ
ಮುತ್ತ ಓಡಾಡುತ್ತವೆ.
21 ಸಿಂಹಗಳು ಬೇಟೆಯಾಡುವಾಗ ಆಹಾರಕ್ಕಾಗಿ ದೇವ
ರನ್ನು ಕೇಳಿಕೊಳ್ಳುತ್ತಿವೆಯೊ ಎಂಬಂತೆ ಘರ್ಜಿಸುತ್ತವೆ.
22 ಸೂರ್ಯನು ಮೇಲೇರುವಾಗ, ಪ್ರಾಣಿಗಳು ತಮ್ಮ
ಗುಹೆಗಳಿಗೆ ಹೋಗಿ ವಿಶ್ರಮಿಸಿಕೊಳ್ಳುತ್ತವೆ.
23 ಬಳಿಕ ಜನರು ಕೆಲಸ ಕಾರ್ಯಗಳಿಗಾಗಿ ಹೊರಟು
ಸಾಯಂಕಾಲದವರೆಗೂ ದುಡಿಯುವರು.
24 ಯೆಹೋವನೇ, ನೀನು ಅನೇಕ ಆಶ್ಚರ್ಯಕರವಾದ
ಕಾರ್ಯಗಳನ್ನು ಮಾಡಿರುವೆ. ನೀನು ಸೃಷ್ಟಿಸಿದ ವಸ್ತು
ಗಳಿಂದ ಭೂಮಿಯು ತುಂಬಿಹೋಗಿದೆ. ನಿನ್ನ ಪ್ರತಿ
ಯೊಂದು ಕಾರ್ಯದಲ್ಲೂ ನಿನ್ನ ಜ್ಞಾನವನ್ನು ಕಾಣ
ಬಲ್ಲವು.
25 ಇಗೋ ವಿಶಾಲವಾದ ಸಮುದ್ರವನ್ನು ನೋಡು
ಅದರೊಳಗೆ ಅನೇಕ ಬಗೆಯ ದೊಡ್ಡಜೀವಿಗಳೂ
ನಾನಾಬಗೆಯ ಚಿಕ್ಕ ಜೀವಿಗಳೂ ಅಸಂಖ್ಯಾತವಾಗಿವೆ.
26 ನೀನು ಸೃಷ್ಟಿಸಿದ ಲಿವ್ಯಾತಾನನು ಸಮುದ್ರದಲ್ಲಿ ಆಟ
ವಾಡುತ್ತಿದ್ದರೂ ಹಡಗು ಸಮುದ್ರದ ಮೇಲೆ
ಸಂಚರಿಸುವುದು.
27 ಈ ಜೀವಿಗಳೆಲ್ಲಾ ನಿನ್ನನ್ನು ಅವಲಂಭಿಸಿಕೊಂಡಿವೆ ಅವು
ಗಳಿಗೆ ಸರಿಸಮಯದಲ್ಲಿ ಆಹಾರವನ್ನು ಕೊಡು
ವಾತನು ನೀನೇ.
28 ಸರ್ವಜೀವಿಗಳಿಗೆ ಆಹಾರವನ್ನು ಕೊಡುವಾತನು
ನೀನೇ. ನೀನು ಕೈತೆರೆದು ಒಳ್ಳೆಯ ಆಹಾರವನ್ನು
ಕೊಡಲು ಅವು ತಿಂದು ತೃಪ್ತಿಯಾಗುತ್ತವೆ.
29 ನೀನು ಅವುಗಳಿಗೆ ವಿಮುಖನಾದಾಗ ಅವು ಭಯ
ಗೊಳ್ಳುತ್ತವೆ. ಅವುಗಳ ಶ್ವಾಸವು ಹೋಗಿ ಬಲಹೀನತೆ
ಯಿಂದ ಸತ್ತು ಮತ್ತೆ ಮಣ್ಣಾಗುತ್ತವೆ.
30 ನಿನ್ನ ಜೀವಶ್ವಾಸವನ್ನು ಊದುವಾಗ ಅವು ಸೃಷ್ಟಿ
ಯಾಗುತ್ತವೆ. ನೀನು ಭೂಮಿಯನ್ನು ಮತ್ತೆ ನೂತನ
ಪಡಿಸುವೆ.
31 ಯೆಹೋವನ ಮಹಿಮೆಯು ಶಾಶ್ವತವಾಗಿರಲಿ!
ಯೆಹೋವನು ತಾನು ಸೃಷ್ಟಿಸಿದವುಗಳಲ್ಲಿ ಆನಂದಿಸಲಿ.
32 ಆತನು ಭೂಮಿಯ ಕಡೆಗೆ ನೋಡಿದರೆ ಸಾಕು,
ಭೂಮಿಯು ನಡುಗುವುದು; ಆತನು ಬೆಟ್ಟಗಳನ್ನು
ಮುಟ್ಟಿದರೆ ಸಾಕು, ಅವು ಜ್ವಾಲಾಮುಖಿಗಳಾಗುತ್ತವೆ.

---

**ಗಾಳಿಯನ್ನು … ಮಾಡಿರುವೆ** ಬಹುಶಃ ಕೆರೂಬಿ ಮತ್ತು ಸೆರಾಫಿ ಎಂಬ ಎರಡು ಬಗೆಯ ದೂತರುಗಳ ಬಗ್ಗೆ ಇದು ತಿಳಿಸುತ್ತಿರಬಹುದು. ಸೆರಾಫ್ ಎಂಬ ಹೀಬ್ರೂ ಭಾಷೆಯ ಪದದ ಅರ್ಥ ‘‘ಬೆಂಕಿ.’’

**ನಮ್ಮನ್ನು … ಮೃದುಗೊಳಿಸುವ** ಅಕ್ಷರಶಃ ‘‘ನಮ್ಮ ಮುಖಕ್ಕೆ ಕಾಂತಿಯನ್ನುಂಟುಮಾಡುವನು.’’

33 ನನ್ನ ಜೀವಮಾನವೆಲ್ಲಾ ನಾನು ಯೆಹೋವನಿಗೆ ಗಾನ ಮಾಡುವೆನು. ನಾನು ಬದುಕಿರುವವರೆಗೂ ಆತನನ್ನು ಸಂಕೀರ್ತಿಸುವೆನು.
34 ನಾನು ಹೇಳಿದ ಈ ವಿಷಯಗಳು ಆತನನ್ನು ಸಂತೋಷ ಗೊಳಿಸಲಿ. ಯೆಹೋವನಲ್ಲಿ ಸಂತೋಷಿಸುವೆನು.
35 ಪಾಪವು ಭೂಮಿಯಿಂದ ಕಾಣದೆಹೋಗಲಿ. ದುಷ್ಟರು ಎಂದೆಂದಿಗೂ ನಿರ್ಮೂಲವಾಗಲಿ. ನನ್ನ ಆತ್ಮವೇ, ಯೆಹೋವನನ್ನು ಸ್ತುತಿಸು! ಯೆಹೋವ ನನ್ನು ಕೊಂಡಾಡು!

## ಕೀರ್ತನೆ 105

1 ಯೆಹೋವನಿಗೆ ಕೃತಜ್ಞತಾಸ್ತುತಿಮಾಡಿರಿ. ಆತನ ಹೆಸರನ್ನು ಆರಾಧಿಸಿರಿ. ಆತನ ಅದ್ಭುತಕಾರ್ಯಗಳ ಕುರಿತು ಜನಾಂಗಗಳಿಗೆ ಸಾರಿ ಹೇಳಿರಿ.
2 ಯೆಹೋವನಿಗೆ ಗಾನಮಾಡಿರಿ ಆತನನ್ನು ಸಂಕೀರ್ತಿಸಿರಿ. ಆತನ ಮಹತ್ಕಾರ್ಯಗಳ ಕುರಿತು ಕೊಂಡಾಡಿರಿ.
3 ಆತನ ಪವಿತ್ರ ನಾಮದಲ್ಲಿ ಹೆಮ್ಮೆಪಡಿರಿ. ಯೆಹೋವನ ಆರಾಧಕರೇ, ಸಂತೋಷಪಡಿರಿ.
4 ಯೆಹೋವನನ್ನೂ ಆತನ ಬಲವನ್ನೂ ಆಶ್ರಯಿಸಿ ಕೊಳ್ಳಿರಿ ; ಸಹಾಯಕ್ಕಾಗಿ ಆತನ ಬಳಿಗೇ ಹೋಗಿರಿ.
5 ಆತನ ಅದ್ಭುತಕಾರ್ಯಗಳನ್ನು ಜ್ಞಾಪಿಸಿಕೊಳ್ಳಿರಿ ಆತನ ಮಹತ್ಕಾರ್ಯಗಳನ್ನು ವಿವೇಕದ ನಿರ್ಧಾರಗಳನ್ನೂ ಜ್ಞಾಪಿಸಿಕೊಳ್ಳಿರಿ.
6 ನೀವು ಆತನ ಸೇವಕನಾದ ಅಬ್ರಹಾಮನ ಸಂತತಿಯವ ರಾಗಿದ್ದೀರಿ; ಆತನು ಆರಿಸಿಕೊಂಡ ಯಾಕೋಬನ ಸಂತತಿಯವರಾಗಿದ್ದೀರಿ.
7 ಯೆಹೋವನೇ ನಮ್ಮ ದೇವರು. ಆತನು ಇಡೀ ಪ್ರಪಂಚವನ್ನು ಆಳುವನು.*
8 ಆತನು ತನ್ನ ಒಡಂಬಡಿಕೆಯನ್ನು ಯಾವಾಗಲೂ ಜ್ಞಾಪಿಸಿಕೊಳ್ಳುವನು. ಆತನು ತನ್ನ ಆಜ್ಞೆಗಳನ್ನು ಸಾವಿರ ತಲೆಮಾರುಗಳವರೆಗೂ ಜ್ಞಾಪಿಸಿ ಕೊಳ್ಳುವನು.
9 ಆತನು ಅಬ್ರಹಾಮನೊಡನೆ ಒಡಂಬಡಿಕೆ ಮಾಡಿ ಕೊಂಡನು. ಆತನು ಇಸಾಕನಿಗೆ ವಾಗ್ದಾನ ಮಾಡಿದನು.
10 ಆತನು ಅದನ್ನು ಯಾಕೋಬನಿಗೆ (ಇಸ್ರೇಲನಿಗೆ) ಕಟ್ಟಳೆಯನ್ನಾಗಿ ಮಾಡಿದನು. ದೇವರು ಇಸ್ರೇಲ ನೊಂದಿಗೆ ತನ್ನ ಶಾಶ್ವತವಾದ ಒಡಂಬಡಿಕೆಯನ್ನು ಮಾಡಿಕೊಂಡನು.
11 “ನಾನು ನಿನಗೆ ಕಾನಾನ್ ದೇಶವನ್ನು ಕೊಡುವೆನು. ಆ ದೇಶವು ನಿನ್ನದಾಗಿರುತ್ತದೆ ” ಎಂದು ಆತನು ಹೇಳಿದನು.
12 ಅಬ್ರಹಾಮನ ಕುಟುಂಬವು ಚಿಕ್ಕದಾಗಿದ್ದಾಗ ಅವರು ಪ್ರಯಾಣಿಕರಂತೆ ಕಾನಾನಿನಲ್ಲಿ ವಾಸವಾಗಿದ್ದಾಗ, ಆತನು ಅವರಿಗೆ ಈ ವಾಗ್ದನವನ್ನು ಮಾಡಿದನು.
13 ಅವರು ದೇಶದಿಂದ ದೇಶಕ್ಕೂ ರಾಜ್ಯದಿಂದ ರಾಜ್ಯಕ್ಕೂ ಪ್ರಯಾಣಮಾಡಿದರು.
14 ಆದರೆ ಅವರಿಗೆ ಯಾರಿಂದಲೂ ಅನ್ಯಾಯವಾಗದಂತೆ ನೋಡಿಕೊಂಡನು. ಅವರನ್ನು ನೋಯಿಸಕೂಡ ದೆಂದು ಆತನು ರಾಜರುಗಳಿಗೆ ಎಚ್ಚರಿಕೆ ನೀಡಿದನು.
15 “ನಾನು ಆರಿಸಿಕೊಂಡಿರುವ ಜನರಿಗೆ ಕೇಡುಮಾಡ ಬೇಡಿ. ನನ್ನ ಪ್ರವಾದಿಗಳಿಗೆ ಯಾವ ಕೆಟ್ಟದ್ದನ್ನೂ ಮಾಡ ಬೇಡಿ ಎಂದು ಆತನು ಹೇಳಿದನು.
16 ದೇವರು ಆ ದೇಶಕ್ಕೆ ಬರಗಾಲವನ್ನು ಬರಮಾಡಿದನು. ಜನರಿಗೆ ತಿನ್ನುವುದಕ್ಕೂ ಸಾಕಷ್ಟು ಆಹಾರವಿರಲಿಲ್ಲ.
17 ಆದರೆ ದೇವರು ಯೋಸೇಫನನ್ನು ಅವರಿಗಿಂತ ಮುಂಚಿತವಾಗಿ ಕಳುಹಿಸಿಕೊಟ್ಟನು. ಯೋಸೇಫನನ್ನು ಗುಲಾಮತನಕ್ಕೆ ಮಾರಲಾಯಿತು.
18 ಅವರು ಯೋಸೇಫನ ಕಾಲುಗಳನ್ನು ಹಗ್ಗಗಳಿಂದ ಕಟ್ಟಿ ದರು; ಅವನ ಕೊರಳಿಗೆ ಕಬ್ಬಿಣದ ಬೇಡಿಯನ್ನು ಹಾಕಿದರು.
19 ಅವನ ಪ್ರವಾದನೆಯು ನೆರವೇರುವವರೆಗೆ ಅವನು ಗುಲಾಮನಾಗಿದ್ದನು. ಯೋಸೇಫನು ಸತ್ಯವಂತ ನೆಂದು ಯೆಹೋವನ ಸಂದೇಶವು ನಿರೂಪಿಸಿತು.
20 ಆದ್ದರಿಂದ ಈಜಿಪ್ಟಿನ ರಾಜನು ಅವನನ್ನು ಬಿಡುಗಡೆ ಮಾಡಿದನು. ಆ ದೇಶದ ರಾಜನು ಅವನನ್ನು ಸೆರೆಮನೆ ಯಿಂದ ಬಿಡಿಸಿದನು.
21 ಅರಮನೆಯ ಮೇಲ್ವಿಚಾರಕನನ್ನಾಗಿ ನೇಮಿಸಿದನು. ರಾಜನ ಆಸ್ತಿಯನ್ನೆಲ್ಲಾ ಯೋಸೇಫನು ನೋಡಿ ಕೊಂಡನು.
22 ಯೋಸೇಫನು ಇತರ ನಾಯಕರುಗಳಿಗೆ ಸಲಹೆ ಗಳನ್ನು ಕೊಟ್ಟನು; ಹಿರಿಯರಿಗೆ ಉಪದೇಶಿಸಿದನು.
23 ಬಳಿಕ ಇಸ್ರೇಲನು ಈಜಿಪ್ಟಿಗೆ ಬಂದನು. ಯಾಕೋ ಬನು ಹಾಮನ ದೇಶದಲ್ಲಿ ವಾಸಿಸಿದನು.
24 ಯಾಕೋಬನ ಕುಟುಂಬ ಬಹು ದೊಡ್ಡದಾಯಿತು. ಅವರು ಈಜಿಪ್ಟಿನವರಿಗಿಂತಲೂ ಬಲಿಷ್ಠರಾದರು.
25 ಆದ್ದರಿಂದ ಈಜಿಪ್ಟಿನವರು ಯಾಕೋಬನ ಕುಟುಂಬ ವನ್ನು ದ್ವೇಷಿಸತೊಡಗಿದರು. ಅವರು ತಮ್ಮ ಗುಲಾ ಮರ ವಿರೋಧವಾಗಿ ಸಂಚುಗಳನ್ನು ಮಾಡ ತೊಡಗಿದರು.
26 ಆದ್ದರಿಂದ ದೇವರು ತನ್ನ ಸೇವಕನಾದ ಮೋಶೆ ಯನ್ನೂ ತಾನು ಆರಿಸಿಕೊಂಡ ಯಾಜಕನಾದ ಆರೋನನನ್ನೂ ಕಳುಹಿಸಿದನು.
27 ಹಾಮನ ದೇಶದಲ್ಲಿ ದೇವರು ಅನೇಕ ಮಹತ್ಕಾರ್ಯ ಗಳನ್ನು ಮೋಶೆ ಆರೋನರ ಮೂಲಕವಾಗಿ ಮಾಡಿದನು.

---

**ಯೆಹೋವನೇ ... ಆಳುವನು** ಅಕ್ಷರಶಃ “ಆತನ ಆಜ್ಞೆಗಳು ಇಡೀ ಪ್ರಪಂಚದಲ್ಲಿವೆ.”

28 ದೇವರು ಕಾರ್ಗತ್ತಲೆಯನ್ನು ಕಳುಹಿಸಿದನು; ಆದರೂ
ಈಜಿಪ್ಟಿನವರು ಆತನಿಗೆ ಕಿವಿಗೊಡಲಿಲ್ಲ.
29 ಆದ್ದರಿಂದ ಆತನು ನೀರನ್ನು ರಕ್ತವನ್ನಾಗಿ ಮಾರ್ಪಡಿ
ಸಿದನು, ಆಗ ಅವರ ಮೀನುಗಳೆಲ್ಲಾ ಸತ್ತುಹೋದವು.
30 ಬಳಿಕ ಈಜಿಪ್ಟಿನವರ ದೇಶವು ಕಪ್ಪೆಗಳಿಂದ ತುಂಬಿ
ಹೋಯಿತು. ರಾಜನು ಮಲಗುವ ಕೋಣೆ
ಯಲ್ಲಿಯೂ ಕಪ್ಪೆಗಳಿದ್ದವು.
31 ದೇವರು ಆಜ್ಞಾಪಿಸಲು ವಿಷದ ಹುಳುಗಳೂ ಹೇನು
ಗಳೂ ಬಂದವು. ಅವು ಎಲ್ಲೆಲ್ಲಿಯೂ ಹರಡಿ
ಕೊಂಡವು.
32 ಆತನು ಮಳೆಯನ್ನು ಕಲ್ಮಳೆಯನ್ನಾಗಿ ಪರಿವರ್ತಿಸಿ
ದನು. ಅವರ ದೇಶದಲ್ಲಿ ಸಿಡಿಲುಗಳು ಹೊಡೆದವು.
33 ದೇವರು ಅವರ ದ್ರಾಕ್ಷಾಲತೆಗಳನ್ನೂ ಅಂಜೂರದ
ಮರಗಳನ್ನೂ ನಾಶಮಾಡಿದನು. ಅವರ ದೇಶದ
ಪ್ರತಿಯೊಂದು ಮರವನ್ನೂ ಆತನು ನಾಶಮಾಡಿದನು.
34 ಆತನು ಆಜ್ಞಾಪಿಸಲು ಮಿಡತೆಗಳೂ ಜಿಟ್ಟೆಹುಳುಗಳೂ
ಅಸಂಖ್ಯಾತವಾಗಿ ಬಂದವು.
35 ಮಿಡತೆಗಳೂ ಜಿಟ್ಟೆಹುಳುಗಳೂ ದೇಶದಲ್ಲಿದ್ದ ಸಸಿಗಳ
ನ್ನೆಲ್ಲಾ ತಿಂದುಬಿಟ್ಟವು. ಭೂಮಿಯ ಮೇಲಿದ್ದ ಬೆಳೆ
ಗಳನ್ನೆಲ್ಲಾ ಅವು ತಿಂದುಬಿಟ್ಟವು.
36 ಬಳಿಕ ದೇವರು ಈಜಿಪ್ಟ್ ದೇಶದ ಎಲ್ಲಾ ಚೊಚ್ಚಲು
ಗಂಡು ಮಕ್ಕಳನ್ನು ಕೊಂದುಹಾಕಿದನು.
37 ಆತನು ತನ್ನ ಜನರನ್ನು ಈಜಿಪ್ಟಿನಿಂದ ಕರೆದುಕೊಂಡು
ಹೋದನು. ಅವರು ತಮ್ಮೊಂದಿಗೆ ಬೆಳ್ಳಿಬಂಗಾರ
ಗಳನ್ನು ತೆಗೆದುಕೊಂಡು ಬಂದರು. ದೇವಜನರಲ್ಲಿ
ಯಾರೂ ಎಡವಿ ಬೀಳಲಿಲ್ಲ.
38 ದೇವಜನರು ಈಜಿಪ್ಟಿನಿಂದ ಹೊರಟಾಗ ಸಂತೋಷ
ಪಟ್ಟರು; ಯಾಕಂದರೆ ಅವರು ದೇವಜನರಿಗೆ ಹೆದರಿ
ಕೊಂಡಿದ್ದರು.
39 ಆತನು ಹಗಲಿನಲ್ಲಿ ಮೋಡವನ್ನು ಕಂಬಳಿಯಂತೆ
ಹರಡಿದನು; ರಾತ್ರಿಯಲ್ಲಿ ಬೆಳಕಿಗಾಗಿ ಅಗ್ನಿಸ್ತಂಭ
ವನ್ನು ದಯಪಾಲಿಸಿದನು.
40 ಜನರು ಮಾಂಸಕ್ಕಾಗಿ ಕೇಳಿಕೊಂಡಾಗ ಆತನು ಅವ
ರಿಗೆ ಲಾವಕ್ಕಿಗಳನ್ನು ಬರಮಾಡಿದನು; ಪರಲೋಕ
ದಿಂದ ಮನ್ನವನ್ನು ದಯಪಾಲಿಸಿದನು.
41 ಆತನು ಬಂಡೆಯನ್ನು ಸೀಳಿದಾಗ ನೀರು ಚಿಮ್ಮುತ್ತಾ
ಹೊರಬಂದಿತು; ಅರಣ್ಯದಲ್ಲಿ ನದಿಯು ಹರಿಯ
ತೊಡಗಿತು!
42 ಆತನು ತನ್ನ ಸೇವಕನಾದ ಅಬ್ರಹಾಮನಿಗೆ ತಾನು
ಮಾಡಿದ ವಾಗ್ದಾನವನ್ನು ಜ್ಞಾಪಿಸಿಕೊಂಡನು.
43 ಆತನು ತನ್ನ ಜನರನ್ನು ಈಜಿಪ್ಟಿನಿಂದ ಹೊರತಂದನು.
ಜನರು ಉಲ್ಲಾಸಪಡುತ್ತಾ ಹರ್ಷಗೀತೆಗಳನ್ನು
ಹಾಡುತ್ತಾ ಹೊರಬಂದರು!
44 ಅನ್ಯಜನರು ವಾಸವಾಗಿದ್ದ ದೇಶವನ್ನು ದೇವರು ತನ್ನ
ಜನರಿಗೆ ಕೊಟ್ಟನು. ಅನ್ಯಜನರು ದುಡಿದು ಸಂಪಾದಿ
ಸಿದ್ದವುಗಳನ್ನು ದೇವಜನರು ಪಡೆದುಕೊಂಡರು.
45 ತನ್ನ ಜನರು ತನ್ನ ಕಟ್ಟಳೆಗಳಿಗೆ ವಿಧೇಯರಾಗಲೆಂದೂ
ತನ್ನ ಉಪದೇಶಗಳನ್ನು ಎಚ್ಚರಿಕೆಯಿಂದ ಪಾಲಿಸ
ಲೆಂದೂ ಆತನು ಹೀಗೆ ಮಾಡಿದನು. ಯೆಹೋವ
ನನ್ನು ಕೊಂಡಾಡಿರಿ.

## ಕೀರ್ತನೆ 106

1 ಯೆಹೋವನನ್ನು ಸ್ತುತಿಸಿರಿ! ಯೆಹೋವನು ಒಳ್ಳೆಯ
ವನು! ಆತನಿಗೆ ಕೃತಜ್ಞತಾಸ್ತುತಿಮಾಡಿರಿ. ಆತನ
ಪ್ರೀತಿಯು ಶಾಶ್ವತವಾದದ್ದು!
2 ಯೆಹೋವನ ಮಹತ್ವವನ್ನು ಸಂಪೂರ್ಣವಾಗಿ ವರ್ಣಿ
ಸಲು ಯಾರಿಗೂ ಆಗದು; ಆತನನ್ನು ಸಂಪೂರ್ಣವಾಗಿ
ಸ್ತುತಿಸುವುದಕ್ಕೂ ಯಾರಿಗೂ ಸಾಧ್ಯವಿಲ್ಲ.
3 ದೇವರ ಆಜ್ಞೆಗಳಿಗೆ ವಿಧೇಯರಾಗಿರುವವರು ಭಾಗ್ಯ
ವಂತರೇ ಸರಿ! ಅವರು ಸತ್ಕಾರ್ಯಗಳನ್ನು ಯಾವಾ
ಗಲೂ ಮಾಡುತ್ತಿರುವರು.
4 ಯೆಹೋವನೇ, ನಿನ್ನ ಜನರಿಗೆ ದಯೆತೋರುವಾಗ
ನನ್ನನ್ನು ಜ್ಞಾಪಿಸಿಕೊಂಡು ರಕ್ಷಿಸು.
5 ಯೆಹೋವನೇ, ನಿನ್ನ ಜನರಿಗೋಸ್ಕರ ನೀನು
ಮಾಡುವ ಒಳ್ಳೆಯವುಗಳಲ್ಲಿ ನನಗೂ ಪಾಲು ದೊರೆ
ಯಲಿ. ನಿನ್ನ ಜನರೊಂದಿಗೆ ನಾನೂ ಸಂತೋಷಪಡು
ವಂತೆ ಮಾಡು. ನಿನ್ನ ಜನರೊಂದಿಗೆ ನಾನು ನಿನ್ನ ಬಗ್ಗೆ
ಹೆಮ್ಮೆಪಡುವಂತಾಗಲಿ.
6 ನಮ್ಮ ಪೂರ್ವಿಕರು ಪಾಪಮಾಡಿದಂತೆಯೇ ನಾವು
ಪಾಪ ಮಾಡಿದೆವು. ನಾವು ಅಪರಾಧಿಗಳಾಗಿದ್ದೆವು;
ದುಷ್ಕೃತ್ಯಗಳನ್ನು ಮಾಡಿದೆವು!
7 ನೀನು ಈಜಿಪ್ಟಿನಲ್ಲಿ ಮಾಡಿದ ಮಹತ್ಕಾರ್ಯಗಳಿಂದ
ನಮ್ಮ ಪೂರ್ವಿಕರು ಏನೂ ಕಲಿತುಕೊಳ್ಳಲಿಲ್ಲ. ಕೆಂಪು
ಸಮುದ್ರದ ಬಳಿಯಲ್ಲಿ ನಮ್ಮ ಪೂರ್ವಿಕರು ನಿನಗೆ
ವಿರೋಧವಾಗಿ ತಿರುಗಿದರು.
8 ಆದರೆ ಆತನು ತನ್ನ ಹೆಸರಿನ ನಿಮಿತ್ತವಾಗಿ ನಮ್ಮ
ಪೂರ್ವಿಕರನ್ನು ರಕ್ಷಿಸಿದನು; ತನ್ನ ಮಹಾಶಕ್ತಿಯನ್ನು
ತೋರಿಸುವುದಕ್ಕಾಗಿ ಅವರನ್ನು ರಕ್ಷಿಸಿದನು.
9 ಆತನು ಆಜ್ಞಾಪಿಸಲು ಕೆಂಪು ಸಮುದ್ರವು ಒಣಗಿ
ಹೋಯಿತು. ಆತನು ಆಳವಾದ ಸಮುದ್ರವನ್ನು
ಇಬ್ಭಾಗ ಮಾಡಿ ಮರಳುಗಾಡಿನಂತೆ ಒಣಗಿಹೋಗಿದ್ದ
ಭೂಮಿಯ ಮೇಲೆ ನಮ್ಮ ಪೂರ್ವಿಕರನ್ನು
ನಡೆಸಿದನು.
10 ನಮ್ಮ ಪೂರ್ವಿಕರನ್ನು ಅವರ ಶತ್ರುಗಳಿಂದ
ರಕ್ಷಿಸಿದನು! ವೈರಿಗಳಿಂದ ಪಾರುಮಾಡಿದನು!

11 ಅವರ ಶತ್ರುಗಳನ್ನು ಸಮುದ್ರದಲ್ಲಿ ಮುಳುಗಿಸಿ
ಬಿಟ್ಟನು. ಅವರ ಶತ್ರುಗಳಲ್ಲಿ ಒಬ್ಬರೂ ತಪ್ಪಿಸಿಕೊಳ್ಳ
ಲಾಗಲಿಲ್ಲ!
12 ನಮ್ಮ ಪೂರ್ವಿಕರು ಆತನನ್ನು ನಂಬಿ
ಸಂಕೀರ್ತಿಸಿದರು.
13 ಆದರೆ ಆತನ ಕಾರ್ಯಗಳನ್ನು ಅವರು ಬೇಗನೆ
ಮರೆತುಬಿಟ್ಟರು; ಆತನ ಉಪದೇಶಗಳಿಗೆ ಕಿವಿ
ಗೊಡಲಿಲ್ಲ.
14 ನಮ್ಮ ಪೂರ್ವಿಕರು ಮರಳುಗಾಡಿನಲ್ಲಿ ಹಸಿವೆ
ಗೊಂಡು ಆತನನ್ನು ಪರೀಕ್ಷಿಸಿದರು.
15 ಆತನು ಅವರ ಆಸೆಯನ್ನು ಪೂರೈಸಿದರೂ ಅವರಿಗೆ
ಭಯಂಕರವಾದ ರೋಗವನ್ನು ಬರಮಾಡಿದನು.
16 ಅವರು ಮೋಶೆಯ ಮೇಲೆಯೂ ಯೆಹೋವನ
ಪವಿತ್ರ ಯಾಜಕನಾದ ಆರೋನನ ಮೇಲೆಯೂ
ಹೊಟ್ಟೇಕಿಚ್ಚುಪಟ್ಟರು.
17 ಭೂಮಿಯು ಬಾಯ್ದೆರೆದು ಹೊಟ್ಟೇಕಿಚ್ಚಿನ
ದಾತಾನನ್ನೂ ಅಬಿರಾಮನ ಪಂಗಡದವರನ್ನೂ
ನುಂಗಿಬಿಟ್ಟಿತು.
18 ಬಳಿಕ ಅವರ ಮಧ್ಯದಲ್ಲಿ ಬೆಂಕಿಯುಂಟಾಯಿತು; ಅಗ್ನಿ
ಜ್ವಾಲೆಯು ಆ ದುಷ್ಟರನ್ನು ದಹಿಸಿಬಿಟ್ಟಿತು.
19 ಹೋರೇಬ್ ಬೆಟ್ಟದ ಬಳಿಯಲ್ಲಿ ಅವರು ಚಿನ್ನದ
ಬಸವನನ್ನು ಮಾಡಿ ಅಡ್ಡಬಿದ್ದರು.
20 ಹುಲ್ಲುತಿನ್ನುವ ಹೋರಿಯ ಮೂರ್ತಿಗಾಗಿ ಅವರು
ಮಹಿಮಾಸ್ವರೂಪನಾದ ದೇವರನ್ನೇ ಮಾರಿಬಿಟ್ಟರು!
21 ಆತನು ನಮ್ಮ ಪೂರ್ವಿಕರನ್ನು ರಕ್ಷಿಸಿದರೂ ಅವರು
ಆತನನ್ನು ಮರೆತುಬಿಟ್ಟರು! ಈಜಿಪ್ಟಿನಲ್ಲಿ ಮಹತ್ಕಾ
ರ್ಯಗಳನ್ನು ಮಾಡಿದ ದೇವರನ್ನು ಅವರು ಮರೆತು
ಬಿಟ್ಟರು.
22 ಆತನು ಹಾಮನ ದೇಶದಲ್ಲಿ ಅದ್ಭುತಕಾರ್ಯಗಳನ್ನು
ಮಾಡಿದನು. ಆತನು ಕೆಂಪು ಸಮುದ್ರದ ಸಮೀಪದಲ್ಲಿ
ಭಯಂಕರವಾದ ಕಾರ್ಯಗಳನ್ನು ಮಾಡಿದನು!
23 ಆತನು ಅವರನ್ನು ನಾಶಮಾಡಬೇಕೆಂದಿದ್ದನು. ಆದರೆ
ಆತನು ಆರಿಸಿಕೊಂಡಿದ್ದ ಮೋಶೆಯು ಮಧ್ಯಸ್ಥನಾಗಿ
ಅವರನ್ನು ನಾಶಮಾಡದಂತೆ ಆತನ ಕೋಪವನ್ನು
ಶಾಂತಪಡಿಸಿದನು.
24 ಬಳಿಕ ಅವರು ರಮಣೀಯವಾದ ಕಾನಾನ್ ದೇಶಕ್ಕೆ
ಹೋಗಲು ಒಪ್ಪಲಿಲ್ಲ. ಅಲ್ಲಿಯ ನಿವಾಸಿಗಳನ್ನು
ಸೋಲಿಸಲು ಆತನು ತಮಗೆ ಸಹಾಯ ಮಾಡುತ್ತಾ
ನೆಂಬ ನಂಬಿಕೆ ಅವರಲ್ಲಿರಲಿಲ್ಲ.
25 ನಮ್ಮ ಪೂರ್ವಿಕರು ಯೆಹೋವನಿಗೆ ವಿಧೇಯ
ರಾಗಲಿಲ್ಲ.
26 ಆದ್ದರಿಂದ ಅವರು ಅರಣ್ಯದಲ್ಲಿ ಸಾಯುವುದಾಗಿ
ದೇವರು ಪ್ರಮಾಣಮಾಡಿದನು.
27 ಅವರ ಸಂತತಿಗಳವರು ಬೇರೆಯವರಿಂದ ಸೋಲಿಸಲ್ಪ
ಡುವುದಾಗಿ ಆತನು ಪ್ರಮಾಣ ಮಾಡಿದನು. ನಮ್ಮ
ಪೂರ್ವಿಕರನ್ನು ಜನಾಂಗಗಳ ಮಧ್ಯೆ ಚದರಿಸುವುದಾಗಿ
ಆತನು ಪ್ರಮಾಣ ಮಾಡಿದನು.
28 ಬಳಿಕ ಬಾಳ್ ಪೆಗೋರಿನಲ್ಲಿ ದೇವಜನರು ಬಾಳನನ್ನು
ಪೂಜಿಸಲು ಸೇರಿಕೊಂಡರು. ಜೀವವಿಲ್ಲದ ವಿಗ್ರಹ
ಗಳಿಗೆ ಅರ್ಪಿಸಿದ ಮಾಂಸವನ್ನು ದೇವಜನರು
ತಿಂದರು.*
29 ಯೆಹೋವನು ತನ್ನ ಜನರ ಮೇಲೆ ಬಹು ಕೋಪ
ಗೊಂಡು ಅವರಿಗೆ ಭಯಂಕರವಾದ ಕಾಯಿಲೆಯನ್ನು
ಬರಮಾಡಿದನು.
30 ಆದರೆ ಫೀನೆಹಾಸನು ಪ್ರಾರ್ಥಿಸಲು ಆತನು ಆ ಕಾಯಿಲೆ
ಯನ್ನು ಗುಣಪಡಿಸಿದನು.
31 ಫೀನೆಹಾಸನ ಈ ಕಾರ್ಯವು ಅವನನ್ನು ತಲೆತಲೆಮಾರು
ಗಳವರೆಗೂ ನೀತಿವಂತನನ್ನಾಗಿ ಮಾಡಿತು.
32 ಮೆರೀಬಾದಲ್ಲಿ ಜನರು ಕೋಪಗೊಂಡು ಮೋಶೆ
ಯನ್ನು ರೇಗಿಸಿದರು.
33 ಅವರಿಂದ ಬೇಸರಗೊಂಡಿದ್ದ ಮೋಶೆಯು ದುಡುಕಿ
ಮಾತಾಡಿದನು.
34 ಕಾನಾನಿನಲ್ಲಿ ವಾಸವಾಗಿದ್ದ ಅನ್ಯ ಜನಾಂಗಗಳನ್ನು
ನಾಶಮಾಡಲು ಯೆಹೋವನು ಅವರಿಗೆ ಹೇಳಿದನು.
ಆದರೆ ಇಸ್ರೇಲರು ದೇವರಿಗೆ ವಿಧೇಯರಾಗಲಿಲ್ಲ.
35 ಅವರು ಬೇರಯವರೊಂದಿಗೆ ಸೇರಿಕೊಂಡು ಅವರ
ದುರಾಚಾರಗಳನ್ನೇ ಮಾಡಿದರು.
36 ಅವರು ದೇವಜನರಿಗೆ ಉರುಲಿನಂತಾದರು. ಆವರ
ದೇವರುಗಳನ್ನು ದೇವಜನರು ಪೂಜಿಸತೊಡಗಿದರು.
37 ದೇವಜನರು ತಮ್ಮ ಸ್ವಂತ ಮಕ್ಕಳನ್ನೂ ಆ ದೆವ್ವಗಳಿಗೆ
ಅರ್ಪಿಸಿದರು.
38 ದೇವಜನರು ನಿರಪರಾಧಿಗಳಾದ ತಮ್ಮ ಮಕ್ಕಳನ್ನು ಆ
ಸುಳ್ಳುದೇವರುಗಳಿಗೆ ಅರ್ಪಿಸಿದರು.
39 ಅನ್ಯಜನರ ಪಾಪಕಾರ್ಯಗಳಿಂದ ದೇವಜನರು
ಮಲಿನಗೊಂಡರು. ಅವರು ದೇವರಿಗೆ ಅಪನಂಬಿಗಸ್ತ
ರಾಗಿ ಅನ್ಯ ಜನರು ಮಾಡಿದವುಗಳನ್ನು ಮಾಡಿದರು.
40 ದೇವರು ತನ್ನ ಜನರ ಮೇಲೆ ಕೋಪಗೊಂಡನು;
ಅವರ ವಿಷಯದಲ್ಲಿ ಬೇಸರಗೊಂಡನು!
41 ದೇವರು ತನ್ನ ಜನರನ್ನು ಅನ್ಯಜನಾಂಗಗಳಿಗೆ ಒಪ್ಪಿಸಿ
ದನು; ಅವರ ಮೇಲೆ ದೊರೆತನ ಮಾಡುವಂತೆ
ವೈರಿಗಳಿಗೆ ಅವರನ್ನು ಬಿಟ್ಟುಕೊಟ್ಟನು.
42 ಶತ್ರುಗಳು ಅವರನ್ನು ತಮ್ಮ ಅದೀನದಲ್ಲಿಟ್ಟುಕೊಂಡು
ಅವರ ಜೀವಿತವನ್ನು ಸಂಕಷ್ಟಕ್ಕೆ ಗುರಿ ಮಾಡಿದರು.
43 ದೇವರು ತನ್ನ ಜನರನ್ನು ಅನೇಕಸಲ ರಕ್ಷಿಸಿದರೂ
ಅವರು ಆತನಿಗೆ ವಿರೋಧವಾಗಿ ತಿರುಗಿ ತಮ್ಮ

---

**ಜೀವವಿಲ್ಲದ … ತಿಂದರು** ''ಸತ್ತವರಿಗೆ ಅರ್ಪಿಸಿದ ಮಾಂಸವನ್ನು ದೇವಜನರು ತಿಂದರು.''

ಇಷ್ಟಾನುಸಾರವಾಗಿ ಮಾಡಿದರು. ಅವರು ಅನೇಕ, ಅನೇಕ ಕೆಟ್ಟಕಾರ್ಯಗಳನ್ನು ಮಾಡಿದರು.
44 ಆದರೆ ಅವರು ಆಪತ್ತಿನಲ್ಲಿದ್ದಾಗಲೆಲ್ಲಾ ದೇವರಿಗೆ ಮೊರೆಯಿಟ್ಟರು; ಆತನು ಅವರ ಪ್ರಾರ್ಥನೆಗಳಿಗೆ ಸದುತ್ತರವನ್ನು ದಯಪಾಲಿಸಿದನು.
45 ಆತನು ತನ್ನ ಒಡಂಬಡಿಕೆಯನ್ನು ಯಾವಾಗಲೂ ಜ್ಞಾಪಿಸಿಕೊಂಡನು. ತನ್ನ ಮಹಾಪ್ರೀತಿಯಿಂದ ಅವರನ್ನು ಸಂತೈಸಿದನು.
46 ಅನ್ಯಜನಾಂಗಗಳು ಆತನ ಜನರನ್ನು ಸೆರೆಯಾಳುಗಳನ್ನಾಗಿ ಎಳೆದೊಯ್ದರು. ಅನ್ಯಜನಾಂಗಗಳು ತನ್ನ ಜನರಿಗೆ ದಯೆ ತೋರುವಂತೆ ಆತನು ಮಾಡಿದನು.
47 ನಮ್ಮ ದೇವರಾದ ಯೆಹೋವನು ನಮ್ಮನ್ನು ರಕ್ಷಿಸಿದನು! ಅನ್ಯಜನಾಂಗಗಳಿಂದ ನಮ್ಮನ್ನು ಬಿಡಿಸಿಕೊಂಡು ಬಂದನು. ಆಗ ನಾವು ಆತನ ಪವಿತ್ರ ಹೆಸರನ್ನು ಕೊಂಡಾಡುವುದಕ್ಕೂ ಆತನನ್ನು ಸಂಕೀರ್ತಿಸುವುದಕ್ಕೂ ಸಾಧ್ಯವಾಯಿತು.
48 ಇಸ್ರೇಲಿನ ದೇವರಾದ ಯೆಹೋವನನ್ನು ಕೊಂಡಾಡಿರಿ. ಆತನು ಯಾವಾಗಲೂ ಇದ್ದವನೂ ಎಂದೆಂದಿಗೂ ಇರುವಾತನೂ ಆಗಿದ್ದಾನೆ. ''ಆಮೆನ್! ಯೆಹೋವನಿಗೆ ಸ್ತೋತ್ರವಾಗಲಿ!'' ಎಂದು ಜನರೆಲ್ಲರೂ ಹೇಳಿದರು.

## ಐದನೆಯ ಭಾಗ

### ಕೀರ್ತನೆ 107

1 ಯೆಹೋವನಿಗೆ ಕೃತಜ್ಞತಾಸ್ತುತಿಮಾಡಿರಿ! ಆತನು ಒಳ್ಳೆಯವನು! ಆತನ ಪ್ರೀತಿ ಶಾಶ್ವತವಾದದ್ದು!
2 ಯೆಹೋವನಿಂದ ರಕ್ಷಿಸಲ್ಪಟ್ಟ ಪ್ರತಿಯೊಬ್ಬರೂ ಆತನಿಗೆ ಕೃತಜ್ಞತಾಸ್ತುತಿ ಮಾಡಲಿ. ಯೆಹೋವನು ಅವರನ್ನು ವೈರಿಗಳಿಂದ ಬಿಡಿಸಿದನು.
3 ಯೆಹೋವನು ತನ್ನ ಜನರನ್ನು ಅನೇಕ ದೇಶಗಳಿಂದ ಒಟ್ಟುಗೂಡಿಸಿದನು; ಪೂರ್ವಪಶ್ಚಿಮಗಳಿಂದಲೂ ಉತ್ತರ ದಕ್ಷಿಣಗಳಿಂದಲೂ ಬರಮಾಡಿದನು.
4 ಅವರಲ್ಲಿ ಕೆಲವರು ಮರುಭೂಮಿಯಲ್ಲಿ ಅಲೆದಾಡಿದರು. ತಾವು ನೆಲೆಸತಕ್ಕ ಪಟ್ಟಣಕ್ಕಾಗಿ ಅವರು ಹುಡುಕಿದರೂ ಅದು ಅವರಿಗೆ ಕಾಣಲಿಲ್ಲ.
5 ಅವರು ಹಸಿವೆಯಿಂದಲೂ ಬಾಯಾರಿಕೆಯಿಂದಲೂ ಬಲಹೀನರಾಗ ತೊಡಗಿದರು.
6 ಆಗ ಅವರು ಯೆಹೋವನಿಗೆ ಮೊರೆಯಿಡಲು ಆತನು ಅವರನ್ನು ಎಲ್ಲಾ ಆಪತ್ತುಗಳಿಂದ ರಕ್ಷಿಸಿದನು.
7 ಅವರು ನೆಲಸತಕ್ಕ ಪಟ್ಟಣಕ್ಕೆ ದೇವರು ಅವರನ್ನು ನೇರವಾಗಿ ನಡೆಸಿದನು.
8 ಆತನ ಪ್ರೀತಿಗಾಗಿಯೂ ತನ್ನ ಜನರಿಗಾಗಿ ಆತನು ಮಾಡುವ ಅದ್ಭುತಕಾರ್ಯಗಳಿಗಾಗಿಯೂ ಕೃತಜ್ಞತಾಸ್ತುತಿಮಾಡಿರಿ.
9 ಆತನು ಬಾಯಾರಿದವರನ್ನು ನೀರಿನಿಂದಲೂ ಹಸಿದವರನ್ನು ಮೃಷ್ಟಾನ್ನದಿಂದಲೂ ತೃಪ್ತಿಗೊಳಿಸುವನು.
10 ದೇವಜನರಲ್ಲಿ ಕೆಲವರು ಸೆರೆಯಾಳುಗಳಾಗಿದ್ದರು; ಕಾರ್ಗತ್ತಲೆಯ ಸೆರೆಮನೆಗಳಲ್ಲಿ ಬಂಧಿತರಾಗಿದ್ದರು.
11 ಯಾಕಂದರೆ ಅವರು ಆತನ ವಿರೋಧವಾಗಿ ದಂಗೆಎದ್ದರು. ಮಹೋನ್ನತನಾದ ದೇವರ ಉಪದೇಶವನ್ನು ತಿರಸ್ಕರಿಸಿದರು.
12 ಅವರ ಕಾರ್ಯಗಳ ನಿಮಿತ್ತವೇ ದೇವರು ಅವರ ಜೀವನವನ್ನು ಸಂಕಷ್ಟಕ್ಕೆ ಒಳಪಡಿಸಿದನು. ಅವರು ಎಡವಿ ಬಿದ್ದರು, ಅವರಿಗೆ ಸಹಾಯಮಾಡಲು ಯಾರೂ ಇರಲಿಲ್ಲ.
13 ಅವರು ಆಪತ್ತಿನಲ್ಲಿದ್ದಾಗ ಯೆಹೋವನಿಗೆ ಮೊರೆಯಿಟ್ಟರು. ಆತನು ಅವರನ್ನು ಆಪತ್ತುಗಳಿಂದ ಬಿಡಿಸಿದನು.
14 ಆತನು ಅವರನ್ನು ಕಾರ್ಗತ್ತಲೆಯ ಸೆರೆಮನೆಗಳಿಂದ ಹೊರ ತಂದನು; ಕಟ್ಟಿದ ಹಗ್ಗಗಳನ್ನು ಕಿತ್ತುಹಾಕಿದನು.
15 ಯೆಹೋವನ ಪ್ರೀತಿಗಾಗಿಯೂ ತನ್ನ ಜನರಿಗೋಸ್ಕರ ಆತನು ಮಾಡುವ ಅದ್ಭುತಕಾರ್ಯಗಳಿಗಾಗಿಯೂ ಆತನಿಗೆ ಕೃತಜ್ಞತಾಸ್ತುತಿಮಾಡಿರಿ.
16 ನಮ್ಮ ಶತ್ರುಗಳನ್ನು ಸೋಲಿಸಲು ದೇವರು ನಮಗೆ ಸಹಾಯ ಮಾಡುವನು. ಅವರ ತಾಮ್ರದ ಬಾಗಿಲುಗಳನ್ನು ಆತನು ಮುರಿದುಹಾಕಬಲ್ಲನು. ಅವರ ಬಾಗಿಲುಗಳ ಮೇಲಿರುವ ಕಬ್ಬಿಣದ ಸರಳುಗಳನ್ನು ಆತನು ನುಚ್ಚುನೂರು ಮಾಡಬಲ್ಲನು.
17 ಕೆಲವರು ತಮ್ಮ ಪಾಪಗಳಿಂದಲೂ ದೋಷಗಳಿಂದಲೂ ಮೂಢರಾದರು.
18 ಆ ಜನರು ಊಟಮಾಡದೆ ಮರಣಾವಸ್ಥೆಗೆ ಬಂದರು.
19 ಅವರು ಆಪತ್ತಿನಲ್ಲಿ ಯೆಹೋವನಿಗೆ ಮೊರೆಯಿಟ್ಟರು. ಆತನು ಅವರನ್ನು ಆಪತ್ತುಗಳಿಂದ ಬಿಡಿಸಿದನು.
20 ಆತನು ಆಜ್ಞಾಪಿಸಲು ಜನರು ಗುಣಹೊಂದಿದರು. ಸಮಾಧಿಯಿಂದ ತಪ್ಪಿಸಿಕೊಂಡರು.
21 ಯೆಹೋವನ ಪ್ರೀತಿಗಾಗಿಯೂ ತನ್ನ ಜನರಿಗೋಸ್ಕರ ಆತನು ಮಾಡುವ ಅದ್ಭುತಕಾರ್ಯಗಳಿಗಾಗಿಯೂ ಕೃತಜ್ಞತಾಸ್ತುತಿ ಮಾಡಿರಿ.
22 ಯೆಹೋವನ ಕಾರ್ಯಗಳಿಗೆ ಕೃತಜ್ಞತಾ ಯಜ್ಞಗಳನ್ನು ಅರ್ಪಿಸಿರಿ. ಆತನ ಕಾರ್ಯಗಳ ಬಗ್ಗೆ ಹರ್ಷದಿಂದ ತಿಳಿಸಿರಿ.
23 ಕೆಲವರು ತಮ್ಮ ಉದ್ಯೋಗಗಳ ನಿಮಿತ್ತ ಸಮುದ್ರಯಾನ ಮಾಡಿದರು.
24 ಯೆಹೋವನು ಮಾಡಬಲ್ಲ ಕಾರ್ಯಗಳನ್ನು ಅವರು ನೋಡಿದರು. ಆತನು ಸಮುದ್ರದಲ್ಲಿ ಮಾಡಿದ ಅದ್ಭುತ ಕಾರ್ಯಗಳನ್ನು ಅವರು ಕಣ್ಣಾರೆ ಕಂಡರು.

25 ಆತನು ಆಜ್ಞಾಪಿಸಲು ಬಲವಾದ ಗಾಳಿ ಬೀಸ
ತೊಡಗಿತು; ಅಲೆಗಳು ದೊಡ್ಡದಾಗ ತೊಡಗಿದವು.
26 ಅಲೆಗಳು ಆಕಾಶದಷ್ಟು ಎತ್ತರವಾಗಿದ್ದವು.
ಭಯಂಕರವಾದ ಬೀರುಗಾಳಿಯಿಂದ ಅವರು ಭಯ
ಗೊಂಡರು.
27 ಅವರು ಅಮಲೇರಿದವರಂತೆ ಎಡವಿಬೀಳ ತೊಡಗಿ
ದರು; ನಾವಿಕರಾಗಿದ್ದ ಅವರ ಕೌಶಲ್ಯವು ನಿಷ್ಪ್ರ
ಯೋಜಕವಾಯಿತು.
28 ಆಗ ಅವರು ಯೆಹೋವನಿಗೆ ಮೊರೆಯಿಡಲು ಆತನು
ಅವರನ್ನು ಆಪತ್ತುಗಳಿಂದ ಬಿಡಿಸಿದನು.
29 ಆತನು ಬಿರುಗಾಳಿಯನ್ನು ನಿಲ್ಲಿಸಿ ಅಲೆಗಳನ್ನು ಶಾಂತ
ಗೊಳಿಸಿದನು.
30 ಸಮುದ್ರವು ಶಾಂತವಾದದ್ದದರಿಂದ ನಾವಿಕರು ಬಹು
ಸಂತೋಷಪಟ್ಟರು. ಅವರು ತಲುಪಬೇಕಿದ್ದ ಸ್ಥಳಕ್ಕೆ
ಆತನು ಅವರನ್ನು ಸುರಕ್ಷಿತವಾಗಿ ನಡೆಸಿದನು.
31 ಯೆಹೋವನ ಪ್ರೀತಿಗಾಗಿಯೂ ತನ್ನ ಜನರಿಗೋಸ್ಕರ
ಆತನು ಮಾಡುವ ಅದ್ಭುತಕಾರ್ಯಗಳಿಗಾಗಿಯೂ
ಕೃತಜ್ಞತಾಸ್ತುತಿಮಾಡಿರಿ.
32 ಆತನನ್ನು ಮಹಾಸಭೆಯಲ್ಲಿ ಸ್ತುತಿಸಿರಿ. ಹಿರಿಯರ
ಸಭೆಯಲ್ಲಿ ಆತನನ್ನು ಕೊಂಡಾಡಿರಿ.
33 ಆತನು ನದಿಗಳನ್ನು ಮರಳುಗಾಡನ್ನಾಗಿ ಮಾರ್ಪಡಿ
ಸಿದನು; ಹರಿಯುವ ಒರತೆಗಳನ್ನು ತಡೆದು
ನಿಲ್ಲಿಸಿದನು.
34 ಆತನು ಫಲವತ್ತಾವಾದ ಭೂಮಿಯನ್ನು ಉಪಯೋಗ
ವಿಲ್ಲದ ಉಪ್ಪುಭೂಮಿಯನ್ನಾಗಿ ಪರಿವರ್ತಿಸಿದನು,
ಯಾಕಂದರೆ ಅಲ್ಲಿ ಕೆಟ್ಟ ಜನರು ನೆಲೆಸಿದ್ದರು.
35 ಆತನು ಮರಳುಗಾಡನ್ನು ಸರೋವರಗಳುಳ್ಳ
ನಾಡನ್ನಾಗಿ ಪರಿವರ್ತಿಸಿದನು; ಒಣನೆಲದಿಂದ ನೀರಿನ
ಒರತೆಗಳನ್ನು ಹರಿಯಮಾಡಿದನು.
36 ಆತನು ಹಸಿದವರನ್ನು ಒಳ್ಳೆಯ ನಾಡಿಗೆ ನಡೆಸಿದನು.
ಅವರು ಅಲ್ಲಿ ನೆಲೆಸಿ ಪಟ್ಟಣವನ್ನು ಕಟ್ಟಿದರು.
37 ಅವರು ಹೊಲಗಳಲ್ಲಿ ಬೀಜ ಬಿತ್ತಿ ತೋಟಗಳಲ್ಲಿ
ದ್ರಾಕ್ಷಾಲತೆಗಳನ್ನು ನೆಟ್ಟು ಒಳ್ಳೆಯ ಸುಗ್ಗಿಗಳನ್ನು
ಪಡೆದರು.
38 ಆತನ ಆಶೀರ್ವಾದದಿಂದ ಅವರ ಕುಟುಂಬಗಳು ವೃದ್ಧಿ
ಯಾದವು. ಅವರ ಪಶುಗಳು ಅಸಂಖ್ಯಾತಗೊಂಡವು.
39 ವಿಪತ್ತುಗಳಿಂದಲೂ ತೊಂದರೆಗಳಿಂದಲೂ ಅವರ
ಕುಟುಂಬಗಳು ಚಿಕ್ಕದಾಗಿದ್ದವು; ಬಲಹೀನ
ವಾಗಿದ್ದವು.
40 ಆತನು ಅವರ ನಾಯಕರುಗಳಿಗೆ ಅವಮಾನ ಮಾಡಿ
ದನು; ದಾರಿಗಳಿಲ್ಲದ ಅರಣ್ಯದಲ್ಲಿ ಅಲೆದಾಡುವಂತೆ
ಅವರನ್ನು ತೊರೆದುಬಿಟ್ಟನು.
41 ಬಳಿಕ ಆತನು ದೀನರನ್ನು ಅವರ ಸಂಕಟದಿಂದ ಬಿಡಿಸಿ
ದನು. ಈಗ ಅವರ ಕುಟುಂಬಗಳು ಕುರಿಮಂದೆಗಳಂತೆ
ದೊಡ್ಡದಾದವು.
42 ಒಳ್ಳೆಯವರು ಇದನ್ನು ಕಂಡು ಸಂತೋಷಪಡುವರು.
ದುಷ್ಟರು ಇದನ್ನು ಕಂಡು ತಮ್ಮ ಬಾಯಿಗಳನ್ನು ಮುಚ್ಚಿ
ಕೊಳ್ಳುವರು.
43 ಜ್ಞಾನಿಯು ಇವುಗಳನ್ನು ನೆನಪು ಮಾಡಿಕೊಂಡು
ದೇವರ ನಿಜಪ್ರೀತಿಯನ್ನು ಅರ್ಥಮಾಡಿಕೊಳ್ಳುವನು.

## ಕೀರ್ತನೆ 108

*ದಾವೀದನ ಕೀರ್ತನೆ*

1 ದೇವರೇ, ನನ್ನ ಹೃದಯವು ಸ್ಥಿರವಾಗಿದೆ; ನಾನು
ಹೃದಯ ಪೂರ್ವಕವಾಗಿ ವಾದ್ಯ ನುಡಿಸುತ್ತಾ
ಹಾಡುವೆನು.
2 ಹಾರ್ಪ್‌ವಾದ್ಯಗಳೇ, ಲೈರ್‌ವಾದ್ಯಗಳೇ, ನಾವು
ಸೂರ್ಯನನ್ನು ಎಚ್ಚರಗೊಳಿಸೋಣ!
3 ಯೆಹೋವನೇ, ಜನಾಂಗಗಳಲ್ಲಿಯೂ ವಿದೇಶಿಯ
ರಲ್ಲಿಯೂ ನಿನ್ನನ್ನು ಕೊಂಡಾಡುವೆವು.
4 ಯಾಕಂದರೆ ನಿನ್ನ ಪ್ರೀತಿಯು ಆಕಾಶಕ್ಕಿಂತಲೂ
ಉನ್ನತವಾಗಿದೆ; ನಿನ್ನ ನಂಬಿಗಸ್ತಿಕೆಯು ಮೋಡಗಳಿ
ಗಿಂತಲೂ ಎತ್ತರವಾಗಿದೆ.
5 ದೇವರೇ, ಆಕಾಶಮಂಡಲದ ಮೇಲೆ ಉದಯಿಸು!
ಲೋಕ ವೆಲ್ಲಾ ನಿನ್ನ ಮಹಿಮೆಯನ್ನು ಕಾಣಲಿ.
6 ನಿನ್ನ ಸ್ನೇಹಿತರಾದ ನಮ್ಮ ಪ್ರಾರ್ಥನೆಗೆ ಕಿವಿಗೊಟ್ಟು
ನಮ್ಮನ್ನು ರಕ್ಷಿಸು. ನಿನ್ನ ಬಲಗೈಯಿಂದ ನಮ್ಮನ್ನು
ಕಾಪಾಡು.
7 ದೇವರು ತನ್ನ ಆಲಯದೊಳಗಿಂದ ಇಂತೆಂದನು:
'ನಾನು ಯುದ್ಧದಲ್ಲಿ ಗೆದ್ದು ಜಯಘೋಷ ಮಾಡು
ವೆನ್ನು; ಶೆಖೆಮ್ ಪ್ರದೇಶವನ್ನೂ ಸುಖೋತ್
ಬಯಲನ್ನೂ ನನ್ನ ಜನರಿಗೆ ಕೊಡುವೆನು.
8 ಗಿಲ್ಯಾದ್ ಪ್ರಾಂತವೂ ಮನಸ್ಸೆ ಪ್ರಾಂತವೂ ನನ್ನದಾಗಿ
ರುತ್ತವೆ. ಎಫ್ರಾಯೀಮ್ ನನ್ನ ಶಿರಸ್ತ್ರಾಣವಾಗಿ
ರುತ್ತದೆ. ಯೆಹೂದವು ನನ್ನ ರಾಜದಂಡವಾಗಿರುತ್ತದೆ.
9 ಮೋವಾಬ್ ನನ್ನ ಪಾದತೊಳೆಯುವ ಬೋಗುಣಿ
ಯಂತಿರುತ್ತದೆ. ಎದೋಮ್ ನನ್ನ ಪಾದರಕ್ಷೆಗಳನ್ನು
ಹೊತ್ತುಕೊಂಡು ಹೋಗುವ ಗುಲಾಮನಾಗಿರುತ್ತದೆ.
ಫಿಲಿಷ್ಟಿಯರನ್ನು ಸೋಲಿಸಿದ ಮೇಲೆ ನಾನು ಜಯ
ಘೋಷ ಮಾಡುವೆನು.''
10 ವೈರಿಗಳ ಆಶ್ರಯದುರ್ಗಕ್ಕೆ ನನ್ನನ್ನು ನಡೆಸುವವರು
ಯಾರು? ಎದೋಮನ್ನು ಸೋಲಿಸಲು ನನಗೆ
ಸಹಾಯ ಮಾಡುವವರು ಯಾರು?
11 ದೇವರೇ, ನೀನು ನಮ್ಮನ್ನು ತ್ಯಜಿಸಿ, ನಮ್ಮ ಸೈನ್ಯ
ದೊಡನೆ ಹೋಗದಿರುವುದು ನಿಜವೇ?

12 ನಮ್ಮ ಶತ್ರುವನ್ನು ಸೋಲಿಸಲು ದಯವಿಟ್ಟು ನಮಗೆ ಸಹಾಯಮಾಡು. ಜನರು ನಮಗೆ ಸಹಾಯಮಾಡ ಲಾರರು!

13 ದೇವರು ಮಾತ್ರ ನಮ್ಮನ್ನು ಬಲಪಡಿಸಬಲ್ಲನು. ಆತನು ಮಾತ್ರ ನಮ್ಮ ಶತ್ರುಗಳನ್ನು ಸೋಲಿಸಬಲ್ಲನು.

## ಕೀರ್ತನೆ 109

*ಸ್ತುತಿಗೀತೆ*

*ರಚನೆಗಾರ: ದಾವೀದ*

1 ದೇವರೇ, ನನ್ನ ಪ್ರಾರ್ಥನೆಗೆ ಕಿವಿಗೊಡದಿರಬೇಡ

2 ದುಷ್ಟರು ನನ್ನ ವಿಷಯವಾಗಿ ಸುಳ್ಳಾಡುತ್ತಿದ್ದಾರೆ. ಅವರು ಅಸತ್ಯವಾದವುಗಳನ್ನು ಹೇಳುತ್ತಿದ್ದಾರೆ.

3 ಅವರು ನನ್ನನ್ನು ದ್ವೇಷಿಸುತ್ತಾರೆ; ನಿಷ್ಕಾರಣವಾಗಿ ನನಗೆ ಎದುರಾಗಿದ್ದಾರೆ.

4 ನಾನು ಅವರನ್ನು ಪ್ರೀತಿಸಿದರೂ ಅವರು ನನ್ನನ್ನು ದ್ವೇಷಿಸುವರು. ನಾನಾದರೋ ನಿನಗೆ ಪ್ರಾರ್ಥಿಸುತ್ತಿದ್ದೇನೆ.

5 ನಾನು ಉಪಕಾರವನ್ನು ಮಾಡಿದ್ದರೂ ಅವರು ನನಗೆ ಅಪಕಾರವನ್ನು ಮಾಡುತ್ತಿದ್ದಾರೆ. ನಾನು ಅವರನ್ನು ಪ್ರೀತಿಸಿದರೂ ಅವರು ನನ್ನನ್ನು ದ್ವೇಷಿಸುವರು.

6 ನನ್ನ ವೈರಿಯನ್ನು ಅವನ ದುಷ್ಕೃತ್ಯಗಳಿಗೆ ತಕ್ಕಂತೆ ದಂಡಿಸು. ಅವನ ಮೇಲೆ ತಪ್ಪು ಹೊರಿಸಲು ದೂಷಕ ನನ್ನು ಅವನ ಬಲಗಡೆಯಲ್ಲಿ ನಿಲ್ಲಿಸು.

7 ನ್ಯಾಯವಿಚಾರಣೆಯಲ್ಲಿ ನ್ಯಾಯಾಧೀಶನು ಅವನನ್ನು ಅಪರಾಧಿಯೆಂದು ನಿರ್ಣಯಿಸಲಿ. ನನ್ನ ಶತ್ರುವಿನ ಪ್ರತಿವಾದವು ಅವನಿಗೆ ಮತ್ತಷ್ಟು ಕೇಡು ಮಾಡಲಿ.

8 ನನ್ನ ಶತ್ರುವು ಬೇಗನೆ ಸಾಯಲಿ. ಅವನ ಉದ್ಯೋಗವು ಮತ್ತೊಬ್ಬನಿಗೆ ದೊರೆಯಲಿ.

9 ಅವನ ಮಕ್ಕಳನ್ನು ಅನಾಥರನ್ನಾಗಿಯೂ ಅವನ ಹೆಂಡತಿಯನ್ನು ವಿಧವೆಯನ್ನಾಗಿಯೂ ಮಾಡು.

10 ಅವರು ತಮ್ಮ ಮನೆಯನ್ನು ಕಳೆದುಕೊಂಡು ಭಿಕ್ಷು ಕರಾಗಲಿ.

11 ಅವನಿಗೆ ಸಾಲಕೊಟ್ಟವರು ಅವನ ಆಸ್ತಿಯನ್ನೆಲ್ಲಾ ಕಸಿದುಕೊಳ್ಳಲಿ. ಅವನು ದುಡಿದು ಸಂಪಾದಿಸಿದ್ದೆಲ್ಲ ವನ್ನು ಪರರು ಸುಲಿದುಕೊಳ್ಳಲಿ.

12 ಅವನಿಗೆ ಯಾರೂ ಕೃಪೆತೋರದಿರಲಿ; ಅವನ ಮಕ್ಕಳಿಗೂ ಯಾರೂ ಕರುಣೆತೋರದಿರಲಿ.

13 ಅವನನ್ನು ಸಂಪೂರ್ಣವಾಗಿ ನಾಶಮಾಡು. ಮುಂದಿನ ತಲೆಮಾರಿನಲ್ಲಿಯೇ ಅವನ ಹೆಸರು ಇಲ್ಲವಾಗಲಿ.

14 ಯೆಹೋವನು ನನ್ನ ಶತ್ರುವಿನ ತಂದೆಯ ಪಾಪವನ್ನು ಮರೆಯದಿರಲಿ; ಅವನ ತಾಯಿಯ ಪಾಪವು ಅಳಿದು ಹೋಗದಿರಲಿ.

15 ಆ ಪಾಪಗಳನ್ನು ಯೆಹೋವನು ಯಾವಾಗಲೂ ಜ್ಞಾಪಕಮಾಡಿಕೊಳ್ಳಲಿ; ಭೂಮಿಯ ಮೇಲೆ ನೆನಪೇ ಉಳಿಯದಂತೆ ಯೆಹೋವನು ಮಾಡಲಿ.

16 ಯಾಕಂದರೆ, ಆ ದುಷ್ಟನು ಯಾವ ಒಳ್ಳೆಯದನ್ನೂ ಮಾಡಲಿಲ್ಲ; ಅವನು ಯಾರನ್ನೂ ಪ್ರೀತಿಸಲಿಲ್ಲ. ಅವನು ಬಡಜನರಿಗೂ ಮತ್ತು ಅಸಹಾಯಕರಿಗೂ ಜೀವನವನ್ನು ಕಷ್ಟಕರವನ್ನಾಗಿ ಮಾಡಿದನು.

17 ಜನರನ್ನು ಶಪಿಸುವುದೇ ಅವನಿಗೆ ಇಷ್ಟವಾಗಿತ್ತು. ಆದ್ದರಿಂದ ಆ ಶಾಪಗಳು ಅವನಿಗೇ ಸಂಭವಿಸಲಿ. ಅವನು ಜನರನ್ನು ಆಶೀರ್ವದಿಸಲೇ ಇಲ್ಲ.

18 ಅವನ ವಸ್ತ್ರವೂ ಶಾಪಗಳಾಗಲಿ. ಅವನು ಕುಡಿಯುವ ನೀರೂ ಶಾಪಗಳಾಗಲಿ. ಅವನ ದೇಹದ ಮೇಲಿರುವ ಎಣ್ಣೆಯೂ ಶಾಪಗಳಾಗಲಿ.

19 ಅವನ ಹೊದಿಕೆಯೂ ಶಾಪಗಳಾಗಲಿ. ಅವನ ನಡು ಕಟ್ಟೂ ಶಾಪಗಳಾಗಲಿ.

20 ನನ್ನ ಶತ್ರುವಿಗೂ ನನ್ನನ್ನು ಕೊಲ್ಲಬೇಕೆಂದಿರುವ ವರಿಗೂ ಯೆಹೋವನು ಅವುಗಳನ್ನು ಮಾಡಲಿ.

21 ಯೆಹೋವನೇ, ನೀನೇ ನನ್ನ ಒಡೆಯನು. ಆದ್ದರಿಂದ ನಿನ್ನ ಹೆಸರಿನ ಘನತೆಗಾಗಿ ನನಗೆ ಸಹಾಯಮಾಡು. ನಿನ್ನ ಶಾಶ್ವತವಾದ ಪ್ರೀತಿಯಿಂದ ನನ್ನನ್ನು ರಕ್ಷಿಸು.

22 ನಾನು ಕೇವಲ ಬಡವನೂ ಅಸಹಾಯಕನೂ ಆಗಿರುವೆ. ನನ್ನ ಹೃದಯವು ನೊಂದು ದುಃಖ ಗೊಂಡಿದೆ.

23 ಸಂಜೆಯ ನೆರಳಿನಂತೆ ನನ್ನ ಜೀವಮಾನವು ಕೊನೆ ಗೊಳ್ಳುತ್ತಿದೆ; ಗಾಳಿ ಬಡಿದುಕೊಂಡು ಹೋಗುವ ಮಿಡತೆ ಯಂತಾಗಿದ್ದೇನೆ.

24 ಹಸಿವೆಯಿಂದ ನನ್ನ ಮೊಣಕಾಲುಗಳು ಬಲಹೀನ ವಾಗಿವೆ. ನನ್ನ ತೂಕ ಕಡಿಮೆಯಾಗುತ್ತಿದೆ; ನಾನು ತೆಳ್ಳಗಾಗುತ್ತಿದ್ದೇನೆ.

25 ಕೆಡುಕರು ನನ್ನನ್ನು ಗೇಲಿಮಾಡುವರು. ಅವರು ನನ್ನನ್ನು ನೋಡಿ ತಲೆಯಾಡಿಸುವರು.

26 ನನ್ನ ದೇವರಾದ ಯೆಹೋವನೇ, ನನಗೆ ಸಹಾಯ ಮಾಡು! ನಿನ್ನ ಶಾಶ್ವತವಾದ ಪ್ರೀತಿಯಿಂದ ನನ್ನನ್ನು ರಕ್ಷಿಸು.

27 ಯೆಹೋವನೇ, ಆಗ ಅವರು ಅದು ನಿನ್ನ ಕೈಕೆಲಸ ವೆಂದೂ ಅದನ್ನು ಮಾಡಿದ್ದು ನೀನೇ ಎಂದು ತಿಳಿದು ಕೊಳ್ಳುವರು.

28 ಆ ದುಷ್ಟರು ನನ್ನನ್ನು ಶಪಿಸುತ್ತಾರೆ; ಯೆಹೋವನೇ, ನೀನಾದರೊ ನನ್ನನ್ನು ಆಶೀರ್ವದಿಸುವೆ. ನನಗೆ ವಿರೋಧವಾಗಿ ಎದ್ದಿರುವ ಅವರನ್ನು ಸೋಲಿಸು ಆಗ, ನಿನ್ನ ಸೇವಕನಾದ ನಾನು ಸಂತೋಷವಾಗಿರುವೆನು.

29 ನನ್ನ ಶತ್ರುಗಳಿಗೆ ಅವಮಾನವೇ ವಸ್ತ್ರವಾಗಲಿ! ನಾಚಿಕೆಯೇ ಅವರ ಮೇಲಂಗಿಯಾಗಲಿ.

30 ನಾನು ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡುವೆನು. ಜನಸಮೂಹದಲ್ಲಿ ಆತನನ್ನು ಕೊಂಡಾಡುವೆನು.
31 ಯಾಕಂದರೆ, ಆತನು ಅಸಹಾಯಕರ ಬಲಗಡೆಯಲ್ಲಿ ನಿಂತುಕೊಳ್ಳುವನು; ಮರಣದಂಡನೆ ವಿಧಿಸಬೇಕೆಂದಿರುವ ಜನರಿಂದ ಅವರನ್ನು ರಕ್ಷಿಸುವನು.

## ಕೀರ್ತನೆ 110

*ಸ್ತುತಿಗೀತೆ ರಚನೆಗಾರ: ದಾವೀದ*

1 ಯೆಹೋವನು ನನ್ನ ಒಡೆಯನಿಗೆ, ''ನಾನು ನಿನ್ನ ಶತ್ರುಗಳನ್ನು ನಿನ್ನ ಪಾದಗಳಿಗೆ ಪೀಠವನ್ನಾಗಿ ಮಾಡುವ ತನಕ ನೀನು ನನ್ನ ಬಲಗಡೆಯಲ್ಲಿ ಕುಳಿತುಕೊಂಡಿರು'' ಎಂದು ಹೇಳಿದನು.
2 ಯೆಹೋವನು ನಿನ್ನ ರಾಜ್ಯವನ್ನು ಅಭಿವೃದ್ಧಿ ಪಡಿಸುವನು. ನಿನ್ನ ರಾಜ್ಯವು ಚೀಯೋನಿನಲ್ಲಿ ಆರಂಭಗೊಂಡು ನಿನ್ನ ಶತ್ರುಗಳ ದೇಶಗಳನ್ನು ಆವರಿಸಿಕೊಳ್ಳುವುದು.
3 ನೀನು ಸೈನ್ಯವನ್ನು ಕೂಡಿಸುವ ದಿನದಲ್ಲಿ ಜನರು ತಾವಾಗಿಯೇ ನಿನ್ನ ಸೈನ್ಯವನ್ನು ಸೇರಿಕೊಳ್ಳುವರು. ಅವರು ಸಮವಸ್ತ್ರಗಳನ್ನು ಧರಿಸಿಕೊಂಡು ಪ್ರತಿಮುಂಜಾನೆ ಸೇರಿ ಬರುವರು. ಆ ಯುವಕರು ನಿನಗೆ ಉದಯಕಾಲದ ಇಬ್ಬನಿಯಂತಿರುವರು.
4 ಯೆಹೋವನು ನನಗೆ, ''ನೀನು ಸದಾಕಾಲ ಮೆಲ್ಕಿಜೆದೇಕನಂತಹ ಯಾಜಕನಾಗಿರುವೆ'' ಎಂದು ವಾಗ್ದಾನ ಮಾಡಿದ್ದಾನೆ. ಆತನು ತನ್ನ ಮನಸ್ಸನ್ನು ಬದಲಾಯಿಸುವುದಿಲ್ಲ.
5 ನನ್ನ ಯೆಹೋವನು ನಿನ್ನ ಬಲಗಡೆಯಲ್ಲಿದ್ದಾನೆ . ಆತನು ಕೋಪಗೊಂಡಾಗ ಇತರ ರಾಜರುಗಳನ್ನು ಸೋಲಿಸಿ ಬಿಡುವನು.
6 ಆತನು ಜನಾಂಗಗಳಿಗೆ ತೀರ್ಪುಮಾಡುವನು. ರಣರಂಗವು ಅವರ ಹೆಣಗಳಿಂದ ತುಂಬಿಹೋಗುವುದು. ಬಲಿಷ್ಠ ರಾಷ್ಟ್ರಗಳ ನಾಯಕರನ್ನು ಆತನು ದಂಡಿಸುವನು.
7 ರಾಜನು ಮಾರ್ಗದಲ್ಲಿ ತೊರೆಯ ನೀರನ್ನು ಕುಡಿದು ಬಲಹೊಂದುವನು.

## ಕೀರ್ತನೆ 111

1 ಯೆಹೋವನಿಗೆ ಸ್ತೋತ್ರವಾಗಲಿ! ನೀತಿವಂತರ ಸಭೆಯಲ್ಲಿ ನಾನು ಪೂರ್ಣಹೃದಯದಿಂದ ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡುವೆನು.
2 ಯೆಹೋವನು ಮಹತ್ಕಾರ್ಯಗಳನ್ನು ಮಾಡುವನು. ಜನರು ಅವುಗಳಲ್ಲಿ ಸಂತೋಷಿಸುತ್ತಾ ಅವುಗಳನ್ನೇ ಧ್ಯಾನಿಸುವರು.
3 ಆತನು ಮಹತ್ವವಾದ ಮತ್ತು ಅದ್ಭುತವಾದ ಕಾರ್ಯಗಳನ್ನು ಮಾಡುವನು. ಆತನ ನೀತಿಯು ಶಾಶ್ವತವಾದದ್ದು.
4 ದೇವರು ಅಮೋಘವಾದ ಕಾರ್ಯಗಳನ್ನು ಮಾಡುವುದರಿಂದ ಆತನ ದಯೆಯನ್ನೂ ಕೃಪೆಯನ್ನೂ ಜ್ಞಾಪಿಸಿಕೊಳ್ಳುತ್ತೇವೆ.
5 ಆತನು ತನ್ನ ಭಕ್ತರಿಗೆ ಆಹಾರವನ್ನು ಒದಗಿಸುವನು; ಆತನು ತನ್ನ ಒಡಂಬಡಿಕೆಯನ್ನು ಯಾವಾಗಲೂ ಜ್ಞಾಪಿಸಿಕೊಳ್ಳುವನು.
6 ಆತನು ಅನ್ಯಜನಾಂಗಗಳ ದೇಶವನ್ನು ತನ್ನ ಜನರಿಗೆ ಕೊಡುವುದರ ಮೂಲಕ ಪ್ರಬಲವಾದ ಕಾರ್ಯಗಳನ್ನು ಮಾಡಿದ್ದಾನೆ.
7 ಆತನ ಪ್ರತಿಯೊಂದು ಕಾರ್ಯವು ಒಳ್ಳೆಯದೂ ನ್ಯಾಯವಾದದ್ದೂ ಆಗಿದೆ. ಆತನ ಆಜ್ಞೆಗಳೆಲ್ಲಾ ನಂಬಿಕೆಗೆ ಯೋಗ್ಯವಾಗಿವೆ.
8 ದೇವರ ಆಜ್ಞೆಗಳು ಶಾಶ್ವತವಾಗಿವೆ. ಅವು ಯಥಾರ್ಥವಾಗಿಯೂ ಮತ್ತು ಶುದ್ಧವಾಗಿಯೂ ಇವೆ.
9 ಆತನು ತನ್ನ ಜನರನ್ನು ರಕ್ಷಿಸಿ ಅವರೊಂದಿಗೆ ಶಾಶ್ವತವಾದ ಒಡಂಬಡಿಕೆಯನ್ನು ಮಾಡಿಕೊಂಡಿದ್ದಾನೆ. ಆತನ ಹೆಸರು ಅದ್ಭುತವಾಗಿಯೂ ಪರಿಶುದ್ಧವಾಗಿಯೂ ಇದೆ.
10 ಯೆಹೋವನ ಮೇಲಿರುವ ಭಯಭಕ್ತಿಗಳಿಂದಲೇ ಜ್ಞಾನವು ಆರಂಭವಾಗುತ್ತದೆ. ಆತನಲ್ಲಿ ಭಯಭಕ್ತಿಯುಳ್ಳವರು ಜ್ಞಾನ ಪೂರ್ಣರಾಗಿದ್ದಾರೆ. ಆತನಿಗೆ ಸದಾಕಾಲ ಸ್ತೋತ್ರವಾಗಲಿ.

## ಕೀರ್ತನೆ 112

1 ಯೆಹೋವನಿಗೆ ಸ್ತೋತ್ರವಾಗಲಿ! ಯಾವನು ಆತನಲ್ಲಿ ಭಯಭಕ್ತಿಯುಳ್ಳವನಾಗಿ ಆತನ ಆಜ್ಞೆಗಳನ್ನು ಪ್ರೀತಿಸುವನೋ ಅವನೇ ಧನ್ಯನು.
2 ಅವನ ಸಂತತಿಗಳವರು ಭೂಮಿಯ ಮೇಲೆ ಪ್ರಬಲರಾಗುವರು; ನೀತಿವಂತನ ಸಂತತಿಗಳವರು ಆಶೀರ್ವಾದವನ್ನು ಹೊಂದಿಕೊಳ್ಳುವರು.
3 ಅವನ ಕುಟುಂಬದವರು ಐಶ್ವರ್ಯವಂತರಾಗುವರು. ಅವನ ನೀತಿಯು ಶಾಶ್ವತವಾಗಿರುವುದು.
4 ಆತನು ನೀತಿವಂತರಿಗೆ ಕತ್ತಲೆಯಲ್ಲಿ ಪ್ರಕಾಶಿಸುವ ಬೆಳಕಿನಂತಿರುವನು. ಆತನು ಒಳ್ಳೆಯವನೂ, ದಯಾಮಯನೂ, ಕೃಪಾಮಯನೂ ಆಗಿದ್ದಾನೆ.
5 ದಯಾವಂತನಿಗೂ ಉದಾರಿಗೂ ಒಳ್ಳೆಯದಾಗುವುದು. ನ್ಯಾಯವಾದ ವ್ಯಾಪಾರಸ್ಥನಿಗೆ ಒಳ್ಳೆಯದಾಗುವುದು.
6 ಅವನೆಂದಿಗೂ ಬೀಳುವುದಿಲ್ಲ. ನೀತಿವಂತನನ್ನು ಜನರು ಸದಾಕಾಲ ಜ್ಞಾಪಿಸಿಕೊಳ್ಳುವರು.
7 ಒಳ್ಳೆಯವನು ಕೆಟ್ಟಸುದ್ದಿಗೆ ಭಯಪಡಬೇಕಿಲ್ಲ. ಅವನು ಯೆಹೋವನಲ್ಲಿ ಭರವಸವಿಟ್ಟಿರುವುದರಿಂದ ಅವನ ಮನಸ್ಸು ಸ್ಥಿರವಾಗಿರುವುದು.
8 ಅವನ ಮನಸ್ಸು ದೃಢವಾಗಿರುವುದರಿಂದ ಅವನು ಭಯಪಡದೆ, ತನ್ನ ಶತ್ರುಗಳನ್ನು ಸೋಲಿಸುವನು.

9 ಅವನು ಬಡವರಿಗೆ ಉದಾರವಾಗಿ ಕೊಡುವನು. ಅವನ ಸತ್ಕಾರ್ಯಗಳು ಶಾಶ್ವತವಾಗಿವೆ.
10 ದುಷ್ಟರು ಇದನ್ನು ಕಂಡು ಕೋಪಗೊಳ್ಳುವರು; ಕೋಪದಿಂದ ಹಲ್ಲು ಕಡಿಯುತ್ತಾ ಅಳಿದು ಹೋಗುವರು. ಅವರ ದುರಾಶೆಯು ಈಡೇರದು.

## ಕೀರ್ತನೆ 113

1 ಯೆಹೋವನಿಗೆ ಸ್ತೋತ್ರವಾಗಲಿ! ಯೆಹೋವನ ಸೇವಕರೇ, ಆತನಿಗೆ ಸ್ತೋತ್ರಮಾಡಿರಿ! ಆತನ ಹೆಸರನ್ನು ಕೊಂಡಾಡಿರಿ.
2 ಯೆಹೋವನ ಹೆಸರು ಇಂದಿಗೂ ಎಂದೆಂದಿಗೂ ಸ್ತುತಿಸಲ್ಪಡಲಿ.
3 ಪೂರ್ವದಿಂದಿಡಿದು ಪಶ್ಚಿಮದವರೆಗೂ ಯೆಹೋವನ ಹೆಸರು ಸ್ತುತಿಸಲ್ಪಡಲಿ.
4 ಯೆಹೋವನು ಎಲ್ಲಾ ಜನಾಂಗಗಳಲ್ಲಿ ಮಹೋನ್ನತನಾಗಿದ್ದಾನೆ; ಆತನ ಮಹಿಮೆಯು ಆಕಾಶಗಳವರೆಗೂ ಏರಿದೆ.
5 ನಮ್ಮ ದೇವರಾದ ಯೆಹೋವನಿಗೆ ಸಮಾನರು ಇಲ್ಲವೇ ಇಲ್ಲ. ಆತನು ಉನ್ನತ ಲೋಕದಲ್ಲಿ ಸಿಂಹಾಸನಾರೂಢನಾಗಿದ್ದಾನೆ.
6 ಆತನು ಆಕಾಶವನ್ನೂ ಭೂಮಿಯನ್ನೂ ಬಾಗಿ ನೋಡುವನು.
7 ಆತನು ಬಡವರನ್ನು ಧೂಳಿನಿಂದ ಎಬ್ಬಿಸುವನು; ಭಿಕ್ಷುಕರನ್ನು ತಿಪ್ಪೆಯಿಂದ ಎತ್ತುವನು.
8 ಆತನು ಅವರನ್ನು ಪ್ರಮುಖರನ್ನಾಗಿಯೂ ನಾಯಕರುಗಳನ್ನಾಗಿಯೂ ಮಾಡುವನು.
9 ಆತನು ಬಂಜೆಗೆ ಮಕ್ಕಳನ್ನು ಅನುಗ್ರಹಿಸಿ ಸಂತೋಷಪಡಿಸುವನು. ಯೆಹೋವನಿಗೆ ಸ್ತೋತ್ರವಾಗಲಿ!

## ಕೀರ್ತನೆ 114

1 ಇಸ್ರೇಲರು ಈಜಿಪ್ಟಿನಿಂದ ಹೊರಟರು. ಯಾಕೋಬ್ಯರು (ಇಸ್ರೇಲರು) ಪರದೇಶದಿಂದ ಹೊರಟರು.
2 ಆಗ ಯೆಹೂದದ ಜನರು ದೇವರ ವಿಶೇಷ ಪ್ರಜೆಯಾದರು; ಇಸ್ರೇಲ್ ಆತನ ರಾಜ್ಯವಾಯಿತು.
3 ಕೆಂಪು ಸಮುದ್ರವು ಇದನ್ನು ಕಂಡು ಓಡಿಹೋಯಿತು. ಜೋರ್ಡನ್ ನದಿಯು ಹಿಂತಿರುಗಿ ಓಡಿಹೋಯಿತು.
4 ಬೆಟ್ಟಗಳು ಟಗರುಗಳಂತೆ ನರ್ತನಮಾಡಿದವು. ಗುಡ್ಡಗಳು ಕುರಿಮರಿಗಳಂತೆ ನೃತ್ಯಮಾಡಿದವು.
5 ಕೆಂಪು ಸಮುದ್ರವೇ, ನೀನೇಕೆ ಓಡಿಹೋದೆ? ಜೋರ್ಡನ್ ನದಿಯೇ ನೀನೇಕೆ ಹಿಂತಿರುಗಿ ಓಡಿಹೋದೆ?
6 ಬೆಟ್ಟಗಳೇ, ನೀವೇಕೆ ಟಗರುಗಳಂತೆ ನರ್ತನಮಾಡಿದಿರಿ? ಗುಡ್ಡಗಳೇ, ನೀವೇಕೆ ಕುರಿಮರಿಗಳಂತೆ ನೃತ್ಯಮಾಡಿದಿರಿ?
7 ಯಾಕೋಬನ ದೇವರೂ ಒಡೆಯನೂ ಆಗಿರುವ ಯೆಹೋವನ ಎದುರಿನಲ್ಲಿ ಭೂಮಿಯು ನಡುಗಿತು.
8 ಬಂಡೆಯೊಳಗಿಂದ ನೀರು ಹರಿದುಬರುವಂತೆ ಮಾಡಿದವನು ಆತನೇ. ಗಟ್ಟಿಯಾದ ಬಂಡೆಯೊಳಗಿಂದ ನೀರಿನ ಒರತೆಯನ್ನು ಬರಮಾಡಿದವನು ಆತನೇ.

## ಕೀರ್ತನೆ 115

1 ಯೆಹೋವನೇ, ಘನಮಾನಗಳು ನಮ್ಮವಲ್ಲ! ಅವು ನಿನ್ನವೇ. ನಿನ್ನ ಪ್ರೀತಿಯ ನಿಮಿತ್ತವಾಗಿಯೂ ನಂಬಿಗಸ್ತಿಕೆಯ ನಿಮಿತ್ತವಾಗಿಯೂ ಘನಮಾನಗಳು ನಿನಗೇ ಸಲ್ಲತಕ್ಕದ್ದು.
2 ಅವರ ದೇವರು ಎಲ್ಲಿದ್ದಾನೆಂದು ಜನಾಂಗಗಳು ಯಾಕೆ ಹೇಳಬೇಕು?
3 ನಮ್ಮ ದೇವರು ಪರಲೋಕದಲ್ಲಿದ್ದಾನೆ; ತಾನು ಬಯಸಿದ್ದನ್ನೆಲ್ಲಾ ಮಾಡುತ್ತಾನೆ.
4 ಅನ್ಯಜನಾಂಗಗಳ ''ದೇವರುಗಳು'' ಬೆಳ್ಳಿಬಂಗಾರಗಳಿಂದ ಮಾಡಿದ ವಿಗ್ರಹಗಳಷ್ಟೇ. ಅವುಗಳನ್ನು ಮಾಡಿದವರು ಮನುಷ್ಯರೇ.
5 ಆ ವಿಗ್ರಹಗಳಿಗೆ ಬಾಯಿಗಳಿವೆ, ಆದರೆ ಮಾತಾಡಲಾರವು. ಕಣ್ಣುಗಳಿವೆ, ಆದರೆ ನೋಡಲಾರವು.
6 ಕಿವಿಗಳಿವೆ, ಆದರೆ ಕೇಳಲಾರವು. ಮೂಗುಗಳಿವೆ, ಆದರೆ ಮೂಸಲಾರವು.
7 ಕೈಗಳಿವೆ, ಆದರೆ ಯಾವುದನ್ನೂ ಮುಟ್ಟಲಾರವು. ಕಾಲುಗಳಿವೆ, ಆದರೆ ನಡೆಯಲಾರವು. ಅವುಗಳ ಗಂಟಲುಗಳಿಂದ ಶಬ್ದವೇ ಹೊರಡದು.
8 ಅವುಗಳನ್ನು ಮಾಡುವವರೂ ಅವುಗಳಲ್ಲಿ ಭರವಸವಿಟ್ಟಿರುವವರೂ ಅವುಗಳಂತೆಯೇ.
9 ಇಸ್ರೇಲರೇ, ಯೆಹೋವನಲ್ಲಿ ಭರವಸವಿಡಿರಿ. ಆತನು ಅವರ ಬಲವೂ ಗುರಾಣಿಯೂ ಆಗಿದ್ದಾನೆ.
10 ಆರೋನನ ಮನೆತನದವರೇ, ಯೆಹೋವನಲ್ಲಿ ಭರವಸವಿಡಿರಿ. ಆತನು ಅವರ ಬಲವೂ ಗುರಾಣಿಯೂ ಆಗಿದ್ದಾನೆ.
11 ಯೆಹೋವನ ಭಕ್ತರು ಆತನಲ್ಲಿ ಭರವಸವಿಡುವರು, ಆತನು ಅವರ ಬಲವೂ ಗುರಾಣಿಯೂ ಆಗಿದ್ದಾನೆ.
12 ಯೆಹೋವನು ನಮ್ಮನ್ನು ಜ್ಞಾಪಕಮಾಡಿಕೊಂಡು ಆಶೀರ್ವದಿಸುವನು. ಆತನು ಇಸ್ರೇಲನ್ನೂ ಆರೋನನ ಮನೆತನವನ್ನೂ ಆಶೀರ್ವದಿಸುವನು.
13 ಆತನು ದೊಡ್ಡವರೂ ಚಿಕ್ಕವರೂ ಎಂದೆನ್ನದೆ ತನ್ನ ಭಕ್ತರನ್ನೆಲ್ಲಾ ಆಶೀರ್ವದಿಸುವನು.
14 ಯೆಹೋವನು ನಿಮ್ಮ ಕುಟುಂಬಗಳನ್ನೂ ನಿಮ್ಮ ಮಕ್ಕಳ ಕುಟುಂಬಗಳನ್ನೂ ಅಭಿವೃದ್ಧಿಪಡಿಸಲಿ.
15 ಯೆಹೋವನು ನಿಮ್ಮನ್ನೂ ನಿಮ್ಮ ಮಕ್ಕಳನ್ನೂ ಅಭಿವೃದ್ಧಿ ಪಡಿಸಲಿ. ಪರಲೋಕವನ್ನೂ ಭೂಲೋಕವನ್ನೂ ಸೃಷ್ಟಿಮಾಡಿದಾತನು ಆತನೇ.

16 ಪರಲೋಕವು ಯೆಹೋವನದು. ಆತನು
ಭೂಲೋಕವನ್ನು ಮನುಷ್ಯರಿಗೆ ಕೊಟ್ಟನು.
17 ಸತ್ತುಹೋದವರು ಯೆಹೋವನನ್ನು ಕೊಂಡಾಡುವು
ದಿಲ್ಲ. ಸಮಾಧಿಯೊಳಗಿರುವವರು ಆತನನ್ನು
ಸ್ತುತಿಸುವುದಿಲ್ಲ.
18 ನಾವಾದರೊ ಯೆಹೋವನನ್ನು ಈಗಲೂ ಯಾವಾ
ಗಲೂ ಸ್ತುತಿಸುವೆವು! ಆತನನ್ನು ಕೊಂಡಾಡಿರಿ!

## ಕೀರ್ತನೆ 116

1 ಯೆಹೋವನು ನನ್ನ ಮೊರೆಯನ್ನು ಕೇಳಿದ್ದರಿಂದ
ನಾನು ಆತನನ್ನು ಪ್ರೀತಿಸುತ್ತೇನೆ.
2 ನಾನು ಆತನಿಗೆ ಮೊರೆಯಿಡುವಾಗಲೆಲ್ಲಾ ಆತನು
ನನಗೆ ಕಿವಿಗೊಡುತ್ತಾನೆ.
3 ಮರಣಕರವಾದ ಹಗ್ಗಗಳು ನನ್ನನ್ನು ಸುತ್ತಿಕೊಂಡಿ
ದ್ದವು. ಸಮಾಧಿಯು ನನ್ನನ್ನು ಮುಚ್ಚಿಕೊಳ್ಳುತ್ತಿತ್ತು.
ನಾನು ಭಯಗೊಂಡಿದ್ದೆನು; ಚಿಂತೆಗೊಳಗಾಗಿದ್ದೆನು.
4 ಆಗ ನಾನು ಯೆಹೋವನ ಹೆಸರು ಹೇಳಿ,''
ಯೆಹೋವನೇ, ನನ್ನನ್ನು ರಕ್ಷಿಸು!'' ಎಂದು ಮೊರೆ
ಯಿಟ್ಟೆನು.
5 ಯೆಹೋವನು ಒಳ್ಳೆಯವನೂ ಕೃಪಾಪೂರ್ಣನೂ
ಆಗಿದ್ದಾನೆ. ನಮ್ಮ ದೇವರು ಕರುಣಾಮಯ
ನಾಗಿದ್ದಾನೆ.
6 ಯೆಹೋವನು ಅಸಹಾಯಕರನ್ನು ಕಾಪಾಡುವನು.
ನಾನು ಅಸಹಾಯಕನಾಗಿದ್ದಾಗ ಯೆಹೋವನು
ನನ್ನನ್ನು ರಕ್ಷಿಸಿದನು.
7 ನನ್ನ ಆತ್ಮವೇ, ವಿಶ್ರಮಿಸಿಕೋ! ಯೆಹೋವನು
ನಿನ್ನನ್ನು ಕಾಪಾಡುವನು.
8 .ಯೆಹೋವನೇ, ನೀನು ನನ್ನ ಆತ್ಮವನ್ನು ಮರಣ
ದಿಂದ ರಕ್ಷಿಸಿದೆ. ನೀನು ನನ್ನ ಕಣ್ಣೀರನ್ನು ನಿಲ್ಲಿಸಿದೆ;
ಬೀಳದಂತೆ ನನ್ನನ್ನು ಕಾಪಾಡಿದೆ.
9 ಜೀವಿಸುವವರ ನಾಡಿನಲ್ಲಿ ನಾನು ಯೆಹೋವನ ಸೇವೆ
ಯನ್ನು ಮುಂದುವರಿಸುವೆನು.
10 ''ನಾಶವಾದೆನು!'' ಎಂದು ನಾನು ಹೇಳಿದಾಗಲೂ
ನಂಬಿಕೊಂಡೇ ಇದ್ದೆನು.
11 ನಾನು ಭಯಗೊಂಡು, ''ಎಲ್ಲಾ ಮನಷ್ಯರು ಸುಳ್ಳು
ಗಾರರಾಗಿದ್ದಾರೆ! '' ಎಂದು ಹೇಳಿದಾಗಲೂ ನಂಬಿ
ಕೊಂಡೇ ಇದ್ದೆನು.
12 ಯೆಹೋವನ ಮಹೋಪಕಾರಗಳಿಗೆ ಬದಲೇನು
ಕೊಡಲಿ? ನನ್ನಲ್ಲಿರುವುದೆಲ್ಲ ಯೆಹೋವನದೇ.
13 ನನ್ನನ್ನು ರಕ್ಷಿಸಿದ್ದರಿಂದ ಆತನಿಗೆ ಪಾನದ್ರವ್ಯವನ್ನು
ಅರ್ಪಿಸುವೆನು. ಆತನ ಹೆಸರಿನಲ್ಲಿ ಪ್ರಾರ್ಥಿಸುವೆನು.
14 ನಾನು ಯೆಹೋವನಿಗೆ ಮಾಡಿದ ಹರಕೆಗಳನ್ನು ಜನರ
ಮುಂದೆ ಆತನಿಗೆ ಸಲ್ಲಿಸುವೆನು.
15 ಯೆಹೋವನು ತನ್ನ ಭಕ್ತರ ಮರಣವನ್ನು ಅಲ್ಪವೆಂದು
ಎಣಿಸುವುದಿಲ್ಲ.
16 ಯೆಹೋವನೇ, ನಾನು ನಿನ್ನ ಸೇವಕ. ನಿನ್ನ ದಾಸಿಯರ
ಲ್ಲೊಬ್ಬಳ ಮಗ. ನೀನೇ ನನ್ನ ಪ್ರಥಮ ಉಪಾಧ್ಯಾಯ!
17 ನಾನು ನಿನಗೆ ಕೃತಜ್ಞತಾಕಾಣಿಕೆಯನ್ನು ಅರ್ಪಿಸುವೆನು.
ಆತನ ಹೆಸರಿನಲ್ಲಿ ಪ್ರಾರ್ಥಿಸುವೆನು.
18 ನನ್ನ ಹರಕೆಗಳನ್ನು ಯೆಹೋವನಿಗೆ ಜನರ ಮುಂದೆ
ಸಲ್ಲಿಸುವೆನು.
19 ಜೆರುಸಲೇಮಿನ ದೇವಾಲಯದ ಅಂಗಳಗಳಲ್ಲಿ ಈ
ಯಜ್ಞಗಳನ್ನು ಅರ್ಪಿಸುವೆನು. ಯೆಹೋವನಿಗೆ
ಸ್ತೋತ್ರವಾಗಲಿ!

## ಕೀರ್ತನೆ 117

1 ಸರ್ವಜನಾಂಗಗಳೇ, ಯೆಹೋವನನ್ನು ಕೊಂಡಾಡಿರಿ.
ಸರ್ವಜನರೇ, ಆತನನ್ನು ಸ್ತುತಿಸಿರಿ.
2 ಆತನ ಪ್ರೀತಿಯು ನಮ್ಮ ಮೇಲೆ ಅಪಾರವಾಗಿದೆ.
ಆತನ ನಂಬಿಗಸ್ತಿಕೆಯು ಶಾಶ್ವತವಾದದ್ದು.
ಯೆಹೋವನಿಗೆ ಸ್ತೋತ್ರವಾಗಲಿ.

## ಕೀರ್ತನೆ 118

1 ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡಿರಿ. ಆತನು
ಒಳ್ಳೆಯವನು. ಆತನ ಪ್ರೀತಿಯು ಶಾಶ್ವತವಾದದ್ದು!
2 ಇಸ್ರೇಲರೇ, ''ಆತನ ಪ್ರೀತಿ ಶಾಶ್ವತವಾದದ್ದು''ಎಂದು
ಹೇಳಿರಿ.

3 ಯಾಜಕರೇ, ''ಆತನ ಪ್ರೀತಿ ಶಾಶ್ವತವಾದದ್ದು!''
ಎಂದು ಹೇಳಿರಿ.
4 ಯೆಹೋವನ ಭಕ್ತರೇ, ''ಆತನ ಪ್ರೀತಿ ಶಾಶ್ವತ
ವಾದದ್ದು'' ಎಂದು ಹೇಳಿರಿ.

5 ನಾನು ಆಪತ್ತಿನಲ್ಲಿ ಯೆಹೋವನಿಗೆ ಮೊರೆಯಿಟ್ಟೆನು.
ಆತನು ನನಗೆ ಸದುತ್ತರವನ್ನು ದಯಪಾಲಿಸಿ ನನ್ನನ್ನು
ಬಿಡಿಸಿದನು.
6 ಯೆಹೋವನು ನನ್ನೊಂದಿಗಿದ್ದಾನೆ, ಆದ್ದರಿಂದ ನಾನು
ಭಯಪಡುವುದಿಲ್ಲ. ಮನುಷ್ಯರು ನನಗೇನು ಮಾಡ
ಬಲ್ಲರು?
7 ಯೆಹೋವನು ನನಗೆ ಸಹಾಯಕನಾಗಿದ್ದಾನೆ. ನನ್ನ
ಶತ್ರುಗಳಿಗಾಗುವ ಸೋಲನ್ನು ಕಣ್ಣಾರೆ ಕಾಣುವೆನು.
8 ಜನರಲ್ಲಿ ಭರವಸೆ ಇಡುವುದಕ್ಕಿಂತಲೂ ಯೆಹೋವ
ನಲ್ಲಿ ಭರವಸೆ ಇಡುವುದೇ ಉತ್ತಮ.
9 ನಿಮ್ಮ ನಾಯಕರುಗಳಲ್ಲಿ ಭರವಸೆ ಇಡುವುದ
ಕ್ಕಿಂತಲೂ ಯೆಹೋವನಲ್ಲಿ ಭರವಸೆ ಇಡುವುದೇ
ಉತ್ತಮ.

10 ಅನೇಕ ಶತ್ರುಗಳು ನನ್ನನ್ನು ಸುತ್ತುಗಟ್ಟಿದರು. ನಾನು ಅವರನ್ನು ಯೆಹೋವನ ಶಕ್ತಿಯಿಂದ ಸೋಲಿಸಿದೆನು.
11 ಶತ್ರುಗಳು ನನ್ನನ್ನು ಮತ್ತೆ ಮತ್ತೆ ಸುತ್ತುಗಟ್ಟಿದರು. ನಾನು ಅವರನ್ನು ಯೆಹೋವನ ಶಕ್ತಿಯಿಂದ ಸೋಲಿಸಿದೆನು.
12 ಶತ್ರುಗಳು ಜೇನುನೊಣಗಳ ಹಿಂಡಿನಂತೆ ನನ್ನನ್ನು ಸುತ್ತುಗಟ್ಟಿದರು. ಆದರೆ, ಧಗಧಗನೆ ಉರಿಯುವ ಪೊದೆಯಂತೆ ಅವರು ಕೊನೆಗೊಂಡರು. ನಾನು ಅವರನ್ನು ಯೆಹೋವನ ಶಕ್ತಿಯಿಂದ ಸೋಲಿಸಿದೆನು.
13 ಶತ್ರುಗಳು ನನ್ನ ಮೇಲೆ ಆಕ್ರಮಣ ಮಾಡಿ ಸಂಪೂರ್ಣ ವಾಗಿ ನಾಶಮಾಡಲಿದ್ದರು. ಆದರೆ ಯೆಹೋವನು ನನಗೆ ಸಹಾಯಮಾಡಿದನು.
14 ನನ್ನ ಬಲವೂ ಜಯಗೀತೆಯೂ ಯೆಹೋವನೇ. ಆತನೇ ನನ್ನನ್ನು ರಕ್ಷಿಸುವನು!
15 ಜಯೋತ್ಸವವು ನೀತಿವಂತರ ಮನೆಗಳಲ್ಲಿ ಕೇಳಿ ಬರುತ್ತಿದೆ. ಯೆಹೋವನು ತನ್ನ ಮಹಾಶಕ್ತಿಯನ್ನು ಮತ್ತೆ ತೋರಿಸಿದ್ದಾನೆ.
16 ಯೆಹೋವನ ಬಲಗೈ ಜಯಗಳಿಸಿದೆ. ಯೆಹೋವನು ತನ್ನ ಮಹಾಶಕ್ತಿಯನ್ನು ಮತ್ತೆ ತೋರಿದ್ದಾನೆ.
17 ನಾನು ಸಾಯುವುದಿಲ್ಲ; ನಾನು ಜೀವದಿಂದಿದ್ದು ಯೆಹೋವನ ಕಾರ್ಯಗಳ ಕುರಿತು ಹೇಳುತ್ತೇನೆ.
18 ಯೆಹೋವನು ನನ್ನನ್ನು ಶಿಕ್ಷಿಸಿದರೂ ಸಾವಿಗೀಡು ಮಾಡಲಿಲ್ಲ.
19 ನೀತಿಯ ಬಾಗಿಲುಗಳೇ, ನನಗೋಸ್ಕರ ತೆರೆಯಿರಿ , ನಾನು ಒಳಗೆ ಬಂದು ಯೆಹೋವನನ್ನು ಆರಾಧಿಸುತ್ತೇನೆ.
20 ಅವು ಯೆಹೋವನ ಬಾಗಿಲುಗಳು. ನೀತಿವಂತರು ಮಾತ್ರ ಆ ಬಾಗಿಲುಗಳ ಮೂಲಕ ಹೋಗಬಲ್ಲರು.
21 ಯೆಹೋವನೇ, ನನ್ನ ಪ್ರಾರ್ಥನೆಗೆ ನೀನು ಉತ್ತರಿಸಿ ನನ್ನನ್ನು ರಕ್ಷಿಸಿದ್ದಕ್ಕೋಸ್ಕರ ನಿನಗೆ ಕೃತಜ್ಞತಾಸ್ತುತಿ ಮಾಡುವೆನು.
22 ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ ಮೂಲೆ ಗಲ್ಲಾಯಿತು.
23 ಇದು ಯೆಹೋವನಿಂದಲೇ ಆಯಿತು. ನಮಗಂತೂ ಇದು ಆಶ್ಚರ್ಯಕರವಾಗಿದೆ!
24 ಈ ದಿನವನ್ನು ಮಾಡಿದಾತನು ಯೆಹೋವನೇ. ಇಂದೇ ನಾವು ಉಲ್ಲಾಸದಿಂದ ಆನಂದಿಸೋಣ.
25 ‘‘ಯೆಹೋವನಿಗೆ ಸ್ತೋತ್ರವಾಗಲಿ! ಆತನು ನಮ್ಮನ್ನು ರಕ್ಷಿಸಿದ್ದಾನೆ.
26 ಯಹೋವನ ಹೆಸರಿನಲ್ಲಿ ಬರುವವನಿಗೆ ಸುಸ್ವಾಗತ!’’ ಎಂದು ಜನರು ಹೇಳಿದರು. ‘‘ನಾವು ನಿನ್ನನ್ನು ಸ್ವಾಗತಿಸುತ್ತೇವೆ!
27 ಯೆಹೋವನೇ ದೇವರು. ಆತನು ನಮ್ಮನ್ನು ಸ್ವೀಕರಿಸಿ ಕೊಳ್ಳುವನು. ಯಜ್ಞಕ್ಕೋಸ್ಕರ ಕುರಿಮರಿಯನ್ನು ಕಟ್ಟಿ ಯಜ್ಞವೇದಿಕೆಯ ಕೊಂಬುಗಳ ಸಮೀಪಕ್ಕೆ ಹೊತ್ತು ಕೊಂಡು ಬನ್ನಿರಿ’’ ಎಂದು ಯಾಜಕರು ಉತ್ತರಿಸಿದರು.
28 ಯೆಹೋವನೇ, ನೀನೇ ನನ್ನ ದೇವರು; ನಾನು ನಿನಗೆ ಕೃತಜ್ಞತೆ ಸಲ್ಲಿಸುವೆನು. ನಾನು ನಿನ್ನನ್ನು ಕೊಂಡಾಡುವೆನು!
29 ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡಿರಿ; ಆತನು ಒಳ್ಳೆಯವನು. ಆತನ ಪ್ರೀತಿಯು ಶಾಶ್ವತವಾದದ್ದು.

## ಕೀರ್ತನೆ 119

1 ಯೆಹೋವನ ಉಪದೇಶವನ್ನು ಅನುಸರಿಸುತ್ತಾ ಪವಿತ್ರರಾಗಿ ಜೀವಿಸುವವರು ಧನ್ಯರಾಗಿದ್ದಾರೆ.
2 ಆತನ ಒಡಂಬಡಿಕೆಗೆ ಸಂಪೂರ್ಣಹೃದಯದಿಂದ ವಿಧೇಯರಾಗುವವರು ಧನ್ಯರು .
3 ಅವರು ಕೆಟ್ಟದ್ದನ್ನು ಮಾಡದೆ ಆತನಿಗೆ ವಿಧೇಯ ರಾಗಿರುವರು.
4 ಯೆಹೋವನೇ, ನಮಗೆ ಆಜ್ಞೆಗಳನ್ನು ಕೊಟ್ಟವನೂ ನೀನೇ. ಅವುಗಳಿಗೆ ಸಂಪೂರ್ಣವಾಗಿ ವಿಧೇಯರಾಗ ಬೇಕೆಂದು ನಮಗೆ ಹೇಳಿದವನೂ ನೀನೇ.
5 ನಿನ್ನ ಕಟ್ಟಳೆಗಳಿಗೆ ನಾನು ಯಾವಾಗಲೂ ವಿಧೇಯ ನಾಗಿದ್ದರೆ,
6 ನಿನ್ನ ಆಜ್ಞೆಗಳನ್ನು ಕಲಿಯುವಾಗ ನನಗೆ ನಾಚಿಕೆ ಯಾಗದು.
7 ನಾನು ನಿನ್ನ ನ್ಯಾಯವನ್ನೂ ನೀತಿಯನ್ನೂ ಕಲಿ ತಂತೆಲ್ಲಾ ನಿನ್ನನ್ನು ಕೊಂಡಾಡುವೆನು.
8 ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗಿದ್ದೇನೆ. ದಯ ವಿಟ್ಟು ನನ್ನನ್ನು ಕೈಬಿಡಬೇಡ !
9 ಯೌವನಸ್ಥನು ಪವಿತ್ರನಾಗಿ ಜೀವಿಸುವುದು ಯಾವು ದರಿಂದ? ನಿನ್ನ ಆಜ್ಞೆಗಳಿಗೆ ವಿಧೇಯನಾಗುವುದ ರಿಂದಲೇ.
10 ನಾನು ಪೂರ್ಣಹೃದಯದಿಂದ ದೇವರ ಸೇವೆ ಮಾಡುವೆ; ದೇವರೇ, ನಿನ್ನ ಆಜ್ಞೆಗಳಿಗೆ ವಿಧೇಯ ನಾಗಲು ನನಗೆ ಸಹಾಯಮಾಡು.
11 ನಾನು ನಿನಗೆ ವಿರೋಧವಾಗಿ ಪಾಪಮಾಡದಂತೆ ನಿನ್ನ ಉಪದೇಶಗಳನ್ನು ಹೃದಯದಲ್ಲಿ ಇಟ್ಟು ಕೊಂಡಿದ್ದೇನೆ.
12 ಯೆಹೋವನೇ, ನಿನಗೆ ಸ್ತೋತ್ರವಾಗಲಿ. ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.
13 ನಿನ್ನ ಜ್ಞಾನದ ನಿರ್ಧಾರಗಳ ಕುರಿತು ಮಾತಾಡುವೆನು.
14 ನಿನ್ನ ಒಡಂಬಡಿಕೆಯನ್ನು ಅಭ್ಯಾಸ ಮಾಡುವುದರಲ್ಲೇ ಆನಂದಿಸುವೆನು.
15 ನಾನು ನಿನ್ನ ನಿಯಮಗಳನ್ನು ಚರ್ಚಿಸುವೆನು ನಿನ್ನ ಜೀವಮಾರ್ಗವನ್ನು ಅನುಸರಿಸುವೆನು.
16 ನಾನು ನಿನ್ನ ಕಟ್ಟಳೆಗಳಲ್ಲಿ ಆನಂದಿಸುವೆನು, ನಿನ್ನ ಮಾತುಗಳನ್ನು ಮರೆಯುವುದಿಲ್ಲ.

17 ನಿನ್ನ ಸೇವಕನಾದ ನನಗೆ ದಯೆತೋರು. ಆಗ ನಾನು
ಜೀವದಿಂದಿದ್ದು ನಿನ್ನ ಆಜ್ಞೆಗಳಿಗೆ ವಿಧೇಯ
ನಾಗುವೆನು.
18 ನನ್ನ ಕಣ್ಣುಗಳನ್ನು ತೆರೆ, ಆಗ ನಾನು ನಿನ್ನ ಉಪದೇಶ
ಗಳನ್ನು ಕಾಣುವೆ; ನೀನು ಮಾಡಿದ ಅದ್ಭುತ
ಕಾರ್ಯಗಳ ಕುರಿತು ಓದುವೆ.
19 ನಾನು ಈ ದೇಶದಲ್ಲಿ ಅಪರಿಚಿತನಾಗಿದ್ದೇನೆ. ನಿನ್ನ
ಉಪದೇಶಗಳನ್ನು ನನಗೆ ಮರೆಮಾಡಬೇಡ.
20 ನಿನ್ನ ನಿರ್ಧಾರಗಳನ್ನು ತಿಳಿದುಕೊಳ್ಳಲು ನಾನು
ಹಂಬಲಿಸುತ್ತಿದ್ದೇನೆ.
21 ನೀನು ಗರ್ವಿಷ್ಠರನ್ನು ಖಂಡಿಸುವೆ. ನಿನ್ನ ಆಜ್ಞೆಗಳಿಗೆ
ವಿಧೇಯರಾಗದ ಅವರು ಶಾಪಗ್ರಸ್ತರಾಗಿದ್ದಾರೆ.
22 ನನ್ನನ್ನು ಅವಮಾನಕ್ಕೂ ನಾಚಿಕೆಗೂ ಗುರಿಮಾಡ
ಬೇಡ. ನಾನು ನಿನ್ನ ಒಡಂಬಡಿಕೆಗೆ ವಿಧೇಯ
ನಾಗಿದ್ದೇನೆ.
23 ನಾಯಕರುಗಳು ಸಹ ನನ್ನನ್ನು ದೂಷಿಸಿದರು. ನಾನು
ನಿನ್ನ ಸೇವಕ, ನಾನು ನಿನ್ನ ಕಟ್ಟಳೆಗಳನ್ನು ಧ್ಯಾನಿಸುವೆ.
24 ನಿನ್ನ ಒಡಂಬಡಿಕೆಯು ನನಗೆ ಉತ್ತಮ ಸ್ನೇಹಿತ
ನಂತಿದೆ. ಅದು ನನಗೆ ಬುದ್ಧಿಮಾತನ್ನು ಹೇಳಿ
ಕೊಡುವುದು.
25 ನನಗೆ ಸಾವು ಸಮೀಪಿಸಿದೆ. ಯೆಹೋವನೇ, ಆಜ್ಞಾಪಿಸಿ
ನನ್ನನ್ನು ಉಜ್ಜೀವಿಸಮಾಡು.
26 ನನ್ನ ಜೀವಿತದ ಬಗ್ಗೆ ನಿನ್ನೊಂದಿಗೆ ಹೇಳಿಕೊಂಡೆ. ಆಗ
ನೀನು ನನಗೆ ಉತ್ತರಿಸಿದೆ. ಈಗ ನಿನ್ನ ಕಟ್ಟಳೆಗಳನ್ನು
ನನಗೆ ಉಪದೇಶಿಸು,
27 ನಿನ್ನ ಕಟ್ಟಳೆಗಳನ್ನು ಅರ್ಥಮಾಡಿಕೊಳ್ಳಲು ನನಗೆ
ಸಹಾಯ ಮಾಡು. ನೀನು ಮಾಡಿದ ಅದ್ಭುತ
ಕಾರ್ಯಗಳನ್ನು ನನಗೆ ತಿಳಿಯಪಡಿಸು.
28 ನಾನು ದುಃಖಗೊಂಡಿರುವೆ ಮತ್ತು ಆಯಾಸ
ಗೊಂಡಿರುವೆ. ನೀನು ನನ್ನನ್ನು ಜ್ಞಾಪಿಸಿಕೊಂಡು ಮತ್ತೆ
ಬಲಗೊಳಿಸು.
29 ಮೋಸಮಾರ್ಗದಲ್ಲಿ ಜೀವಿಸಲು ನನ್ನನ್ನು ಬಿಡಬೇಡ.
ನಿನ್ನ ಉಪದೇಶಗಳಿಂದ ನನಗೆ ಮಾರ್ಗದರ್ಶನ
ಮಾಡು.
30 ನಾನು ಸತ್ಯಮಾರ್ಗವನ್ನು ಆರಿಸಿಕೊಂಡಿದ್ದೇನೆ. ನಿನ್ನ
ಜ್ಞಾನದ ನಿರ್ಧಾರಗಳನ್ನು ಎಚ್ಚರಿಕೆಯಿಂದ ತಿಳಿದು
ಕೊಳ್ಳುವೆನು.
31 ನಿನ್ನ ಒಡಂಬಡಿಕೆಗೆ ಅಂಟಿಕೊಂಡಿದ್ದೇನೆ. ನನ್ನನ್ನು
ನಿರಾಶೆಗೊಳಿಸಬೇಡ.
32 ನಿನ್ನ ಆಜ್ಞೆಗಳಿಗೆ ಹರ್ಷದಿಂದ ವಿಧೇಯನಾಗುವೆನು.
ನಿನ್ನ ಆಜ್ಞೆಗಳು ನನ್ನನ್ನು ಉಲ್ಲಾಸಗೊಳಿಸುತ್ತವೆ.
33 ಯೆಹೋವನೇ, ನಿನ್ನ ಕಟ್ಟಳೆಗಳನ್ನು ನನಗೆ ಉಪ
ದೇಶಿಸು, ಆಗ ಅವುಗಳನ್ನು ಅನುಸರಿಸುವೆನು.
34 ಅರ್ಥಮಾಡಿಕೊಳ್ಳಲು ನನಗೆ ಸಹಾಯಮಾಡು. ಆಗ
ನಿನ್ನ ಉಪದೇಶಗಳಿಗೆ ಸಂಪೂರ್ಣವಾಗಿ ವಿಧೇಯ
ನಾಗುವೆನು.
35 ನಿನ್ನ ಆಜ್ಞೆಗಳ ಮಾರ್ಗದಲ್ಲಿ ನನ್ನನ್ನು ನಡೆಸು. ಆ
ಮಾರ್ಗವೇ ನನಗೆ ಬಹು ಇಷ್ಟ.
36 ಐಶ್ವರ್ಯದ ಮೇಲೆ ಮನಸ್ಸಿಡದೆ ನಿನ್ನ ಒಡಂ
ಬಡಿಕೆಯ ಬಗ್ಗೆ ಧ್ಯಾನಿಸಲು ನನಗೆ ಸಹಾಯಮಾಡು.
37 ನಿಷ್ಪ್ರಯೋಜಕವಾದವುಗಳ ಮೇಲೆ ದೃಷ್ಟಿಸದಂತೆ
ನನ್ನನ್ನು ಕಾಪಾಡು. ನಿನ್ನ ಮಾರ್ಗದಲ್ಲಿ ಜೀವಿಸಲು
ನನಗೆ ಸಹಾಯ ಮಾಡು.
37 ನಿನ್ನ ಸೇವಕನಾದ ನನಗೆ ನೀನು ಮಾಡಿದ ವಾಗ್ದಾನ
ಗಳನ್ನು ನೆರವೇರಿಸು. ಆಗ ಜನರು ನಿನ್ನನ್ನು
ಗೌರವಿಸುವರು.
39 ಅವಮಾನವನ್ನು ನನ್ನಿಂದ ತೊಲಗಿಸು. ನಾನು ಅದಕ್ಕೆ
ಹೆದರಿಕೊಂಡಿದ್ದೇನೆ. ನಿನ್ನ ಜ್ಞಾನದ ನಿರ್ಧಾರಗಳು
ಒಳ್ಳೆಯವುಗಳಾಗಿವೆ.
40 ಇಗೋ, ನಿನ್ನ ಆಜ್ಞೆಗಳನ್ನು ಪ್ರೀತಿಸುವೆನು. ನನಗೆ
ಒಳ್ಳೆಯವನಾಗಿದ್ದು ನನ್ನನ್ನು ಉಜ್ಜೀವನಗೊಳಿಸು.
41 ಯೆಹೋವನೇ, ನಿನ್ನ ಶಾಶ್ವತ ಪ್ರೀತಿಯನ್ನು ನನಗೆ
ತೋರಿಸು. ನಿನ್ನ ವಾಗ್ದಾನದಂತೆ ನನ್ನನ್ನು ರಕ್ಷಿಸು.
42 ನನ್ನನ್ನು ಗೇಲಿಮಾಡುವ ಜನರಿಗೆ ಆಗ ನಾನು ಉತ್ತರ
ಕೊಡುವೆನು. ಯೆಹೋವನೇ, ನಿನ್ನ ಮಾತುಗಳಲ್ಲೇ
ನಾನು ಭರವಸವಿಟ್ಟಿದ್ದೇನೆ.
43 ನಿನ್ನ ಸತ್ಯೋಪದೇಶಗಳನ್ನು ನಾನು ಯಾವಾಗಲೂ
ಮಾತಾಡುವಂತಾಗಲಿ. ನಿನ್ನ ಜ್ಞಾನದ ನಿರ್ಧಾರ
ಗಳನ್ನೇ ನಾನು ಆಶ್ರಯಿಸಿಕೊಂಡಿದ್ದೇನೆ.
44 ನಿನ್ನ ಉಪದೇಶಗಳನ್ನು ಎಂದೆಂದಿಗೂ ಅನು
ಸರಿಸುವೆನು.
45 ಯಾಕಂದರೆ, ನಿನ್ನ ಕಟ್ಟಳೆಗಳಿಗೆ ವಿಧೇಯನಾಗಲು
ನಾನು ಬಹಳವಾಗಿ ಪ್ರಯತ್ನಿಸುತ್ತಿರುವುದರಿಂದ
ಯಾರಹಂಗಿಲ್ಲದೆ ನಡೆಯುವೆನು.
46 ಯೆಹೋವನ ಒಡಂಬಡಿಕೆಯ ಕುರಿತು
ಚರ್ಚಿಸುವೆನು ನಾಚಿಕೆಪಡುವುದಿಲ್ಲ.
47 ನಿನ್ನ ಆಜ್ಞೆಗಳಲ್ಲಿ ಆನಂದಿಸುವೆನು;
48 ನಿನ್ನ ಆಜ್ಞೆಗಳನ್ನು ಕೊಂಡಾಡುವೆನು, ಅವುಗಳನ್ನು
ಧ್ಯಾನಿಸುವೆನು.
49 ನಿನ್ನ ವಾಗ್ದಾನವನ್ನು ನನಗೋಸ್ಕರ ನೆನಪು
ಮಾಡಿಕೋ. ಆ ವಾಗ್ದಾನವೇ ನನ್ನ ನಿರೀಕ್ಷೆಯಾಗಿದೆ.
50 ಸಂಕಟಪಡುತ್ತಿರುವಾಗ ನೀನು ನನ್ನನ್ನು ಸಂತೈಸಿದೆ.
ನಿನ್ನ ನುಡಿಗಳು ನನ್ನನ್ನು ಉಜ್ಜೀವನಗೊಳಿಸಲಿ.
51 ಗರ್ವಿಷ್ಠರು ನನ್ನನ್ನು ಗೇಲಿಮಾಡುತ್ತಲೇ ಇದ್ದರು.
ನಾನಾದರೊ ನಿನ್ನ ಉಪದೇಶಗಳನ್ನು ಅನು
ಸರಿಸುತ್ತಲೇ ಇದ್ದೆನು.

52 ನಿನ್ನ ಜ್ಞಾನದ ನಿರ್ಧಾರಗಳನ್ನು ಯಾವಾಗಲೂ ಜ್ಞಾಪಿಸಿಕೊಳ್ಳುವೆ. ಅವು ನನ್ನನ್ನು ಸಂತೈಸುತ್ತವೆ.
53 ನಿನ್ನ ಉಪದೇಶಗಳನ್ನು ಅನುಸರಿಸದ ದುಷ್ಟರನ್ನು ನಾನು ಕಾಣುವಾಗ ಬಹು ಕೋಪಗೊಳ್ಳುವೆ.
54 ನನಗಂತೂ, ನಿನ್ನ ಆಜ್ಞೆಗಳು ನನ್ನ ಮನೆಯಲ್ಲಿ* ಹಾಡುಗಳಾಗಿವೆ.
55 ರಾತ್ರಿಯಲ್ಲಿ ನಾನು ನಿನ್ನ ಹೆಸರನ್ನೂ ನಿನ್ನ ಉಪದೇಶಗಳನ್ನೂ ಜ್ಞಾಪಿಸಿಕೊಳ್ಳುವೆ.
56 ಯಾಕಂದರೆ, ನಾನು ನಿನ್ನ ಆಜ್ಞೆಗಳಿಗೆ ಎಚ್ಚರಿಕೆಯಿಂದ ವಿಧೇಯನಾಗುವೆನು.
57 ಯೆಹೋವನೇ, ನಿನ್ನ ಆಜ್ಞೆಗಳಿಗೆ ವಿಧೇಯನಾಗುವುದೇ ನನ್ನ ಕರ್ತವ್ಯವೆಂದು ನಿರ್ಧರಿಸಿರುವೆ.
58 ನಿನ್ನನ್ನೇ ಸಂಪೂರ್ಣವಾಗಿ ಆಶ್ರಯಿಸಿಕೊಂಡಿದ್ದೇನೆ. ನಿನ್ನ ವಾಗ್ದಾನದಂತೆ ನನಗೆ ಕರುಣೆತೋರು.
59 ನನ್ನ ಜೀವಿತದ ಕುರಿತು ಎಚ್ಚರಿಕೆಯಿಂದ ಆಲೋಚಿಸಿ ನಿನ್ನ ಕಟ್ಟಳೆಗಳನ್ನು ಅನುಸರಿಸಲು ನಿರ್ಧರಿಸಿದ್ದೇನೆ.
60 ನಿನ್ನ ಆಜ್ಞೆಗಳಿಗೆ ವಿಧೇಯನಾಗಲು ತಡಮಾಡದೆ ಬೇಗನೆ ಹಿಂತಿರುಗಿದೆನು.
61 ಗುಂಪಾಗಿ ಸೇರಿದ್ದ ದುಷ್ಟರು ನನ್ನನ್ನು ದೂಷಿಸಿದರೂ ನಿನ್ನ ಉಪದೇಶಗಳನ್ನು ನಾನು ಮರೆಯಲಿಲ್ಲ .
62 ನಿನ್ನ ಒಳ್ಳೆಯ ನಿರ್ಧಾರಗಳಿಗಾಗಿ ಕೃತಜ್ಞತೆ ಸಲ್ಲಿಸಲು ನಾನು ಮಧ್ಯರಾತ್ರಿಯಲ್ಲಿ ಎದ್ದೇಳುವೆನು.
63 ನಿನ್ನಲ್ಲಿ ಭಯಭಕ್ತಿಯುಳ್ಳವರಿಗೆ ನಾನು ಸ್ನೇಹಿತನಾಗಿದ್ದೇನೆ. ನಿನ್ನ ಆಜ್ಞೆಗಳಿಗೆ ವಿಧೇಯರಾಗುವ ಪ್ರತಿಯೊಬ್ಬರಿಗೂ ನಾನು ಸ್ನೇಹಿತನಾಗಿದ್ದೇನೆ.
64 ನಿನ್ನ ಶಾಶ್ವತ ಪ್ರೀತಿಯು ಭೂಮಿಯನ್ನು ತುಂಬಿಕೊಂಡಿದೆ. ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.
65 ಯೆಹೋವನೇ, ನಿನ್ನ ವಾಗ್ದಾನಕ್ಕೆ ತಕ್ಕಂತೆ ನಿನ್ನ ಸೇವಕನಿಗೆ ಒಳ್ಳೆಯದನ್ನೇ ಮಾಡಿರುವೆ .
66 ಜ್ಞಾನದ ನಿರ್ಧಾರಗಳನ್ನು ಮಾಡಲು ನನಗೆ ಜ್ಞಾನವನ್ನು ಕೊಡು. ನಾನು ನಿನ್ನ ಆಜ್ಞೆಗಳಲ್ಲಿ ಭರವಸವಿಟ್ಟಿರುವೆ.
67 ನಾನು ಸಂಕಟಪಡುವುದಕ್ಕಿಂತ ಮೊದಲು ಅನೇಕ ಕೆಟ್ಟ ಕಾರ್ಯಗಳನ್ನು ಮಾಡಿದೆ; ಈಗಲಾದರೊ ನಾನು ನಿನ್ನ ಆಜ್ಞೆಗಳಿಗೆ ಎಚ್ಚರಿಕೆಯಿಂದ ವಿಧೇಯನಾಗುವೆನು.
68 ನೀನು ಒಳ್ಳೆಯವನೂ ಒಳ್ಳೆಯಕಾರ್ಯಗಳನ್ನು ಮಾಡುವವನೂ ಆಗಿರುವೆ. ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.
69 ಗರ್ವಿಷ್ಠರು ನನಗೆ ವಿರೋಧವಾಗಿ ಸುಳ್ಳು ಹೇಳಿದರು. ನಾನಾದರೋ ನಿನ್ನ ಆಜ್ಞೆಗಳಿಗೆ ಪೂರ್ಣ ಹೃದಯದಿಂದ ವಿಧೇಯನಾಗಿರುವೆ.
70 ಅವರು ಬಹು ಮೂಢರು. ನಾನಾದರೊ ನಿನ್ನ ಉಪದೇಶಗಳನ್ನು ಕಲಿಯುವುದರಲ್ಲಿ ಆನಂದಿಸುವೆ.
71 ನಿನ್ನ ಆಜ್ಞೆಗಳನ್ನು ಕಲಿಯಲು ನಾನು ಪಟ್ಟ ಪ್ರಯಾಸವು ಒಳ್ಳೆಯದಾಯಿತು.
72 ನಿನ್ನ ಉಪದೇಶಗಳು ನನಗೆ ಒಳ್ಳೆಯದಾಗಿವೆ. ಅವು ಹತ್ತು ಸಾವಿರ ಬೆಳ್ಳಿಬಂಗಾರಗಳ ನಾಣ್ಯಗಳಿಗಿಂತಲೂ ಅಮೂಲ್ಯವಾಗಿವೆ.
73 ನಿನ್ನ ಕೈಗಳು ನನ್ನನ್ನು ರೂಪಿಸಿದವು. ನಿನ್ನ ಆಜ್ಞೆಗಳನ್ನು ಕಲಿತುಕೊಳ್ಳಲು ನನಗೆ ಸಹಾಯಿಸು.
74 ನಾನು ನಿನ್ನ ವಾಕ್ಯದಲ್ಲಿ ಭರವಸವಿಟ್ಟಿರುವುದರಿಂದ ನಿನ್ನ ಭಕ್ತರು ನನ್ನನ್ನು ಕಂಡಾಗ ಸಂತೋಷಿಸಲಿ.
75 ನಿನ್ನ ತೀರ್ಪುಗಳು ನ್ಯಾಯವಾದವುಗಳೆಂದು ನನಗೆ ತಿಳಿದಿದೆ. ನೀನು ನನ್ನನ್ನು ಶಿಕ್ಷಿಸಿದ್ದು ನನ್ನ ದೃಷ್ಟಿಯಲ್ಲಿ ನ್ಯಾಯವಾಗಿತ್ತು.
76 ಈಗ, ನಿನ್ನ ಶಾಶ್ವತ ಪ್ರೀತಿಯಿಂದ ನನ್ನನ್ನು ಸಂತೈಸು. ನಿನ್ನ ವಾಗ್ದಾನದಂತೆ ನನ್ನನ್ನು ಸಂತೈಸು.
77 ನನ್ನನ್ನು ಸಂತೈಸಿ ಉಜ್ಜೀವನಗೊಳಿಸು; ನಾನು ನಿನ್ನ ಉಪದೇಶಗಳಲ್ಲಿಯೇ ಆನಂದಿಸುತ್ತಿರುವೆ.
78 ಗರ್ವಿಷ್ಠರಿಗೆ ಅವಮಾನವಾಗಲಿ; ಅವರು ನನ್ನ ಬಗ್ಗೆ ಸುಳ್ಳು ಹೇಳಿದ್ದಾರೆ. ನಾನು ನಿನ್ನ ಕಟ್ಟಳೆಗಳನ್ನು ಧ್ಯಾನಿಸುವೆನು.
79 ನಿನ್ನ ಭಕ್ತರು ನನ್ನ ಬಳಿಗೆ ಹಿಂತಿರುಗಿ ಬರಲಿ. ನಿನ್ನ ಒಡಂಬಡಿಕೆಯನ್ನು ಅವರು ಕಲಿತುಕೊಳ್ಳಲಿ.
80 ನಾನು ನಿನ್ನ ಆಜ್ಞೆಗಳಿಗೆ ಪೂರ್ಣವಾಗಿ ವಿಧೇಯನಾಗಿರುವಂತೆ ಮಾಡು. ಆಗ ನನಗೆ ಅವಮಾನವಾಗುವುದಿಲ್ಲ.
81 ನಿನ್ನ ರಕ್ಷಣೆಗಾಗಿ ಕಾಯುತ್ತಾ ಸಾಯುವಂತಾಗಿದ್ದೇನೆ. ನಿನ್ನ ವಾಕ್ಯಗಳಲ್ಲಿಯೇ ಭರವಸವಿಟ್ಟಿದ್ದೇನೆ.
82 ನಿನ್ನ ವಾಗ್ದಾನಗಳಿಗಾಗಿ ಎದುರುನೋಡುತ್ತಾ ನನ್ನ ಕಣ್ಣುಗಳು ಆಯಾಸಗೊಳ್ಳುತ್ತಿವೆ. ನೀನು ಯಾವಾಗ ನನ್ನನ್ನು ಸಂತೈಸುವೆ?
83 ಬಿಸಾಕಲ್ಪಟ್ಟ ದ್ರಾಕ್ಷಾರಸದ ಬುದ್ದಲಿಯಂತಿದ್ದೇನೆ, ಆದರೂ ನಾನು ನಿನ್ನ ಕಟ್ಟಳೆಗಳನ್ನು ಮರೆಯುವುದಿಲ್ಲ.
84 ನಾನು ಇನ್ನೆಷ್ಟುಕಾಲ ಬದುಕಲಿ ನನ್ನನ್ನು ಹಿಂಸಿಸುವವರನ್ನು ಯಾವಾಗ ದಂಡಿಸುವಿ?
85 ನಿನ್ನ ಕಟ್ಟಳೆಗಳಿಗೆ ವಿರೋಧವಾಗಿ ಗರ್ವಿಷ್ಠರು ನನಗೆ ಗುಂಡಿಗಳನ್ನು ಅಗೆದಿದ್ದಾರೆ .
86 ನಿನ್ನ ಆಜ್ಞೆಗಳೆಲ್ಲಾ ನಂಬಿಕೆಗೆ ಯೋಗ್ಯವಾಗಿವೆ. ಅವರಾದರೊ ನನ್ನನ್ನು ನಿಷ್ಕಾರಣವಾಗಿ ಹಿಂಸಿಸುತ್ತಾರೆ; ನನಗೆ ಸಹಾಯಮಾಡು!
87 ಅವರು ನನ್ನನ್ನು ನಾಶಮಾಡಿಯೇ ಬಿಟ್ಟಿದ್ದರು. ನಾನಾದರೊ ನಿನ್ನ ಕಟ್ಟಳೆಗಳನ್ನು ಮರೆತುಬಿಡಲೇ ಇಲ್ಲ.

---

**ನನ್ನ ಮನೆಯಲ್ಲಿ** ಅಥವಾ ‘‘ದೇವಾಲಯದಲ್ಲಿ.’’

88 ನಿನ್ನ ಶಾಶ್ವತಪ್ರೀತಿಯನ್ನು ತೋರಿ ನನ್ನನ್ನು ಉಜ್ಜೀವಿಸ ಮಾಡು. ಆಗ, ನಾನು ನಿನ್ನ ಕಟ್ಟಳೆಗಳಿಗೆ ವಿಧೇಯ ನಾಗುವೆನು.

89 ಯೆಹೋವನೇ, ನಿನ್ನ ವಾಕ್ಯವು ಪರಲೋಕದಲ್ಲಿ ಶಾಶ್ವತವಾಗಿ ಸ್ಥಾಪಿಸಲ್ಪಟ್ಟಿದೆ .

90 ನೀನು ಎಂದೆಂದಿಗೂ ನಂಬಿಗಸ್ತನಾಗಿರುವೆ. ನೀನು ಭೂಮಿಯನ್ನು , ಸೃಷ್ಟಿಸಿದೆ; ಅದು ಇಂದಿಗೂ ಸ್ಥಿರವಾಗಿ ನಿಂತಿದೆ.

91 ನಿನ್ನ ಆಜ್ಞೆಗಳಿಗನುಸಾರವಾಗಿ ಅದು ಸ್ಥಿರವಾಗಿಯೇ ಇದೆ. ಅವುಗಳೆಲ್ಲಾ ಸೇವಕರಂತೆ ನಿನ್ನ ಆಜ್ಞೆಗಳಿಗೆ ವಿಧೇಯವಾಗಿವೆ.

92 ನಿನ್ನ ಉಪದೇಶಗಳು ನನಗೆ ಸ್ನೇಹಿತರಂತಿವೆ; ಇಲ್ಲ ವಾಗಿದ್ದರೆ ಸಂಕಟವು ನನ್ನನ್ನು ನಾಶಮಾಡಿಬಿಡುತ್ತಿತ್ತು.

93 ನಾನು ನಿನ್ನ ಆಜ್ಞೆಗಳನ್ನು ಮರೆಯುವುದೇ ಇಲ್ಲ. ಯಾಕಂದರೆ ನಾನು ಬದುಕಿರುವುದು ಅವು ಗಳಿಂದಲೇ.

94 ನಾನು ನಿನ್ನವನು, ನನ್ನನ್ನು ರಕ್ಷಿಸು! ನಿನ್ನ ಆಜ್ಞೆಗಳಿಗೆ ಆಸಕ್ತಿಯಿಂದ ವಿಧೇಯನಾಗಿದ್ದೇನೆ.

95 ದುಷ್ಟರು ನನ್ನನ್ನು ನಾಶಮಾಡಲು ಪ್ರಯತ್ನಿಸಿದರು, ಆದರೆ ನಿನ್ನ ಒಡಂಬಡಿಕೆಯು ನನ್ನನ್ನು ಜ್ಞಾನಿ ಯನ್ನಾಗಿ ಮಾಡಿತು.

96 ನಿನ್ನ ಧರ್ಮಶಾಸ್ತ್ರದ ಹೊರತು ಬೇರೆಲ್ಲವುಗಳಿಗೂ ಮೇರೆಯಿದೆ.

97 ನಿನ್ನ ಉಪದೇಶಗಳು ನನಗೆ ಪ್ರಿಯವಾಗಿವೆ; ದಿನವೆಲ್ಲಾ ಅವುಗಳನ್ನೇ ಧ್ಯಾನಿಸುವೆನು.

98 ನಿನ್ನ ಆಜ್ಞೆಗಳು ನನ್ನನ್ನು ನನ್ನ ಶತ್ರುಗಳಿಗಿಂತಲೂ ಹೆಚ್ಚು ಜ್ಞಾನಿಯನ್ನಾಗಿ ಮಾಡುತ್ತವೆ. ಅವು ಯಾವಾಗಲೂ ನನ್ನೊಂದಿಗಿವೆ.

99 ನಿನ್ನ ಒಡಂಬಡಿಕೆಯನ್ನು ನಾನು ಧ್ಯಾನಿಸುತ್ತಿರುವುದ ರಿಂದನನ್ನ ಉಪಾಧ್ಯಾಯರಿಗಿಂತ ಜ್ಞಾನಿಯಾಗಿದ್ದೇನೆ.

100 ನಾನು ನಿನ್ನ ಆಜ್ಞೆಗಳನ್ನು ಅನುಸರಿಸುವುದರಿಂದ ಹಿರಿಯರಿಗಿಂತ ವಿವೇಕಿಯಾಗಿದ್ದೇನೆ.

101 ನನ್ನ ಪಾದಗಳು ಕೆಟ್ಟದಾರಿಗೆ ಹೋಗದಂತೆ ನನ್ನನ್ನು ಕಾಪಾಡು, ಆಗ, ನಾನು ನಿನ್ನ ವಾಕ್ಯವನ್ನೇ ಅನು ಸರಿಸುವೆನು.

102 ನೀನೇ ನನ್ನ ಉಪಾಧ್ಯಾಯ. ಆದ್ದರಿಂದ ನಿನ್ನ ಕಟ್ಟಳೆಗಳಿಗೆ ವಿಧೇಯನಾಗಿಯೇ ಇರುವೆನು.

103 ನಿನ್ನ ನುಡಿಗಳು ನನ್ನ ಬಾಯಲ್ಲಿ ಜೇನಿಗಿಂತಲೂ ಸಿಹಿ ಯಾಗಿವೆ.

104 ನಿನ್ನ ಉಪದೇಶಗಳು ನನ್ನನ್ನು ಜ್ಞಾನಿಯನ್ನಾಗಿ ಮಾಡುತ್ತವೆ, ಆದ್ದರಿಂದ ನಾನು ದುರುಪದೇಶ ಗಳನ್ನು ದ್ವೇಷಿಸುವೆನು.

105 ನಿನ್ನ ವಾಕ್ಯವು ನನ್ನ ಕಾಲಿಗೆ ದೀಪವೂ ದಾರಿಗೆ ಬೆಳಕೂ ಆಗಿದೆ.

106 ನಿನ್ನ ಕಟ್ಟಳೆಗಳು ಒಳ್ಳೆಯವೇ. ಅವುಗಳಿಗೆ ವಿಧೇಯ ನಾಗಿರುವುದಾಗಿ ಪ್ರಮಾಣಮಾಡಿದ್ದೇನೆ, ಅದನ್ನು ನೆರವೇರಿಸುವೆನು.

107 ನಾನು ಬಹುಕಾಲ ಸಂಕಟಪಟ್ಟಿದ್ದೇನೆ; ಆಜ್ಞಾಪಿಸಿ ನನ್ನನ್ನು ಉಜ್ಜೀವಿಸಮಾಡು.

108 ಯೆಹೋವನೇ, ನನ್ನ ಸ್ತೋತ್ರವನ್ನು ಸ್ವೀಕರಿಸು. ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.

109 ನನ್ನ ಪ್ರಾಣವು ಯಾವಾಗಲೂ ಅಪಾಯದಲ್ಲಿದೆ. ನಾನಾದರೋ ನಿನ್ನ ಉಪದೇಶಗಳನ್ನು ಮರೆತು ಬಿಟ್ಟಿಲ್ಲ.

110 ದುಷ್ಟರು ನನಗೆ ಬಲೆಯೊಡ್ಡಿದ್ದಾರೆ. ನಾನಾದರೋ ನಿನ್ನ ಆಜ್ಞೆಗಳಿಗೆ ಅವಿಧೇಯನಾಗಲಿಲ್ಲ.

111 ನಿನ್ನ ಕಟ್ಟಳೆಗಳನ್ನು ಎಂದೆಂದಿಗೂ ನಿತ್ಯಸ್ವಾಸ್ತ್ಯವನ್ನಾಗಿ ಆರಿಸಿಕೊಂಡಿದ್ದೇನೆ. ಅವು ನನ್ನ ಹೃದಯಕ್ಕೆ ಆನಂದ ಕರವಾಗಿವೆ.

112 ನಿನ್ನ ಕಟ್ಟಳೆಗಳಿಗೆಲ್ಲಾ ಯಾವಾಗಲೂ ವಿಧೇಯ ನಾಗಿರಲು ಮನಸ್ಸು ಮಾಡಿದ್ದೇನೆ.

113 ನಿನಗೆ ಪೂರ್ಣವಾಗಿ ನಂಬಿಗಸ್ತರಾಗಿಲ್ಲದವರನ್ನು ದ್ವೇಷಿಸುವೆನು. ನಾನಾದರೋ ನಿನ್ನ ಉಪದೇಶ ಗಳನ್ನು ಪ್ರೀತಿಸುವೆನು.

114 ನನ್ನ ಆಶ್ರಯವು ಗುರಾಣಿಯೂ ನೀನೇ. ಯೆಹೋವನೇ, ನಿನ್ನ ವಾಕ್ಯದಲ್ಲಿ ಭರವಸವಿಟ್ಟಿರುವೆ.

115 ಕೆಡುಕರನ್ನು ನನ್ನ ಬಳಿಗೆ ಬರಗೊಡಿಸಬೇಡ. ಆಗ ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗುವೆನು.

116 ನಿನ್ನ ವಾಗ್ದಾನಕ್ಕನುಸಾರವಾಗಿ ನನಗೆ ಸಹಾಯ ಮಾಡು ಆಗ ನಾನು ಬದುಕಿಕೊಳ್ಳುವೆ. ನಾನು ನಿನ್ನಲ್ಲಿ ಭರವಸವಿಟ್ಟಿರುವೆ, ನನ್ನನ್ನು ನಿರಾಶೆಗೊಳಿಸಬೇಡ.

117 ನನಗೆ ಸಹಾಯಮಾಡು, ಆಗ ನಾನು ರಕ್ಷಿಸಲ್ಪಡು ವೆನು. ನಾನು ನಿನ್ನ ಆಜ್ಞೆಗಳನ್ನು ಯಾವಾಗಲೂ ಕಲಿಯುತ್ತಿರುವೆನು.

118 ನಿನ್ನ ಕಟ್ಟಳೆಗಳನ್ನು ಅನುಸರಿಸದವರನ್ನು ನೀನು ತಳ್ಳಿ ಬಿಡುವೆ. ಯಾಕಂದರೆ, ಆವರು ನಿನಗೆ ದ್ರೋಹ ಮಾಡಿದರು.

119 ಭೂಮಿಯ ಮೇಲಿರುವ ದುಷ್ಟರನ್ನು ನೀನು ಕಸ ದಂತೆ ಕಾಣುವೆ. ಆದ್ದರಿಂದ ನಾನು ನಿನ್ನ ಒಡಂಬಡಿಕೆ ಯನ್ನು ಸದಾಕಾಲ ಪ್ರೀತಿಸುವೆನು.

120 ನಾನು ನಿನ್ನಲ್ಲಿ ಭಯವುಳ್ಳವನಾಗಿದ್ದೇನೆ. ನಾನು ನಿನ್ನ ಕಟ್ಟಳೆಗಳಿಗೂ ಭಯಭಕ್ತಿಯಿಂದಿರುವೆನು.

121 ನ್ಯಾಯ ನೀತಿಗಳುಳ್ಳ ಕಾರ್ಯಗಳನ್ನೇ ನಾನು ಮಾಡಿರುವೆ, ಕೆಡುಕರಿಗೆ ನನ್ನನ್ನು ಒಪ್ಪಿಸಿಕೊಡಬೇಡ.

122 ನಿನ್ನ ಸೇವಕನಾದ ನನಗೆ ಸಹಾಯಮಾಡುವುದಾಗಿ ವಾಗ್ದಾನ ಮಾಡು. ನನಗೆ ಕೇಡುಮಾಡಲು ಆ ಗರ್ವಿಷ್ಠರಿಗೆ ಅವಕಾಶಕೊಡಬೇಡ.

123 ನಿನ್ನ ರಕ್ಷಣೆಗಾಗಿಯೂ ನಿನ್ನ ಒಳ್ಳೆಯ ಮಾತಿಗಾಗಿಯೂ ಎದುರುನೋಡುತ್ತಾ ನನ್ನ ಕಣ್ಣುಗಳು ಆಯಾಸಗೊಂಡಿವೆ.
124 ನಿನ್ನ ಸೇವಕನಾದ ನನಗೆ ನಿನ್ನ ಶಾಶ್ವತ ಪ್ರೀತಿಯನ್ನು ತೋರಿಸು. ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.
125 ನಾನು ನಿನ್ನ ಸೇವಕ, ನಿನ್ನ ಒಡಂಬಡಿಕೆಯನ್ನು ಗ್ರಹಿಸಿಕೊಳ್ಳಲು ನನಗೆ ಬೇಕಾದ ವಿವೇಕವನ್ನು ದಯಪಾಲಿಸು.
126 ಯೆಹೋವನೇ, ನಿನ್ನ ಕಾರ್ಯಾಚರಣೆಗೆ ಇದು ತಕ್ಕ ಸಮಯವಾಗಿದೆ. ಜನರು ನಿನ್ನ ಧರ್ಮಶಾಸ್ತ್ರವನ್ನು ಮೀರಿದ್ದಾರೆ.
127 ನಾನು ನಿನ್ನ ಆಜ್ಞೆಗಳನ್ನು ಬಂಗಾರಕ್ಕಿಂತಲೂ ಹೆಚ್ಚಾಗಿ ಪ್ರೀತಿಸುವೆನು.
128 ನಾನು ನಿನ್ನ ಆಜ್ಞೆಗಳಿಗೆಲ್ಲಾ ಎಚ್ಚರಿಕೆಯಿಂದ ವಿಧೇಯನಾಗುವೆನು. ನಾನು ಸುಳ್ಳು ಉಪದೇಶಗಳನ್ನು ದ್ವೇಷಿ ಸುವೆನು.
129 ನಿನ್ನ ಕಟ್ಟಳೆಗಳು ಆಶ್ಚರ್ಯಕರವಾಗಿವೆ. ಪೂರ್ಣಹೃದಯದಿಂದ ಅವುಗಳನ್ನು ಅನುಸರಿಸುವೆನು.
130 ಜನರು ನಿನ್ನ ವಾಕ್ಯವನ್ನು ಅರ್ಥಮಾಡಿಕೊಂಡಾಗ ಅದು ಅವರಿಗೆ ನೀತಿಮಾರ್ಗವನ್ನು ತೋರಿಸುವ ಬೆಳಕಿನಂತಿರುವುದು. ನಿನ್ನ ವಾಕ್ಯವು ಸಾಮಾನ್ಯರನ್ನೂ ಜ್ಞಾನಿಗಳನ್ನಾಗಿ ಮಾಡುತ್ತದೆ.
131 ನಿನ್ನ ಆಜ್ಞೆಗಳನ್ನು ಕಲಿತುಕೊಳ್ಳಲು ನನಗೆ ನಿಜವಾಗಿಯೂ ಇಷ್ಟ. ನಾನು ಏದುಸಿರುಬಿಡುತ್ತಾ ಲವಲವಿಕೆಯಿಂದ ನಿನ್ನ ಆಜ್ಞೆಗಳಿಗಾಗಿ ಕಾಯುತ್ತಿದ್ದೇನೆ.
132 ನನ್ನನ್ನು ನೋಡಿ ಕರುಣಿಸು. ನಿನ್ನ ಹೆಸರನ್ನು ಪ್ರೀತಿಸುವವರಿಗೆ ಯೋಗ್ಯವಾದುವುಗಳನ್ನು ಮಾಡು.
133 ನಿನ್ನ ವಾಗ್ದಾನಕ್ಕನುಸಾರವಾಗಿ ನನಗೆ ಮಾರ್ಗದರ್ಶನ ನೀಡು. ಯಾವ ಕೇಡೂ ನನಗೆ ಸಂಭವಿಸದಿರಲಿ.
134 ಕೆಡುಕರಿಂದ ನನ್ನನ್ನು ರಕ್ಷಿಸು. ಆಗ ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗುವೆನು.
135 ನಿನ್ನ ಸೇವಕನನ್ನು ಸ್ವೀಕರಿಸಿಕೊ, ನಿನ್ನ ಕಟ್ಟಳೆಗಳನ್ನು ನನಗೆ ಉಪದೇಶಿಸು.
136 ಗೋಳಾಟದಿಂದ ನನ್ನ ಕಣ್ಣೀರು ನದಿಯಾಗಿ ಹರಿಯುತ್ತಿದೆ; ಜನರು ನಿನ್ನ ಉಪದೇಶಗಳಿಗೆ ವಿಧೇಯರಾಗದಿರುವುದರಿಂದ
137 ಯೆಹೋವನೇ, ನೀನು ನೀತಿಸ್ವರೂಪನಾಗಿರುವೆ. ನಿನ್ನ ಕಟ್ಟಳೆಗಳು ನ್ಯಾಯವಾಗಿವೆ.
138 ನೀನು ನೀತಿಯ ಕಟ್ಟಳೆಗಳನ್ನೇ ಕೊಟ್ಟಿರುವೆ. ಅವು ನಂಬಿಕೆಗೆ ಯೋಗ್ಯವಾಗಿವೆ.
139 ನನ್ನ ಅಭಿಮಾನವು ನನ್ನನ್ನು ದಹಿಸುತ್ತಿದೆ. ಯಾಕಂದರೆ ನನ್ನ ವೈರಿಗಳು ನಿನ್ನ ಆಜ್ಞೆಗಳನ್ನು ಮರೆತುಬಿಟ್ಟಿದ್ದರಿಂದ ನನಗೆ ಬೇಸರವಾಗಿದೆ.
140 ನಿನ್ನ ವಾಗ್ದಾನಗಳು ಪರೀಕ್ಷಿಸಲ್ಪಟ್ಟಿವೆ. ಅವು ನನಗೆ ಪ್ರಿಯವಾಗಿವೆ.
141 ನಾನು ಅಲ್ಪನೂ ತಿರಸ್ಕೃತನೂ ಆಗಿದ್ದೇನೆ. ಆದರೂ ನಾನು ನಿನ್ನ ಆಜ್ಞೆಗಳನ್ನು ಮರೆಯುವುದಿಲ್ಲ.
142 ನಿನ್ನ ನೀತಿಯು ಶಾಶ್ವತವಾದದ್ದು. ನಿನ್ನ ಉಪದೇಶಗಳು ನಂಬಿಕೆಗೆ ಯೋಗ್ಯವಾಗಿವೆ.
143 ಕಷ್ಟಸಂಕಟಗಳು ನನಗೆ ಬಂದಿದ್ದವು. ನಿನ್ನ ಆಜ್ಞೆಗಳು ನನಗೆ ಆನಂದಕರವಾಗಿವೆ.
144 ನಿನ್ನ ಕಟ್ಟಳೆಗಳು ಸದಾಕಾಲ ನೀತಿಯ ಕಟ್ಟಳೆಗಳಾಗಿವೆ. ಅವುಗಳನ್ನು ಅರ್ಥಮಾಡಿಕೊಳ್ಳಲು ನನಗೆ ಸಹಾಯ ಮಾಡು, ಆಗ ಬದುಕಿಕೊಳ್ಳುವೆನು.
145 ಯೆಹೋವನೇ, ಪೂರ್ಣಹೃದಯದಿಂದ ನಿನಗೆ ಮೊರೆಯಿಟ್ಟಿದ್ದೇನೆ; ಸದುತ್ತರವನ್ನು ದಯಪಾಲಿಸು. ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗುವೆನು.
146 ನಾನು ನಿನಗೇ ಮೊರೆಯಿಟ್ಟಿದ್ದೇನೆ. ನನ್ನನ್ನು ರಕ್ಷಿಸು! ನಿನ್ನ ಕಟ್ಟಳೆಗಳಿಗೆ ವಿಧೇಯನಾಗುತ್ತೇನೆ.
147 ಸೂರ್ಯೋದಯದಲ್ಲಿ ಎದ್ದು ನಿನಗೆ ಮೊರೆಯಿಟ್ಟೆನು. ನಿನ್ನ ವಾಕ್ಯದಲ್ಲಿ ಭರವಸವಿಟ್ಟಿದ್ದೇನೆ.
148 ನಿನ್ನ ವಾಕ್ಯವನ್ನು ಧ್ಯಾನಿಸುವುದಕ್ಕಾಗಿ ರಾತ್ರಿಯಲ್ಲಿ ಬಹುಹೊತ್ತಿನವರೆಗೆ ಎಚ್ಚರವಾಗಿದ್ದೆನು.
149 ಯೆಹೋವನೇ, ನಿನ್ನ ಪೂರ್ಣ ಪ್ರೀತಿಯಿಂದ ನನಗೆ ಕಿವಿಗೊಡು. ನಿನ್ನ ಕಟ್ಟಳೆಗಳಿಗನುಸಾರವಾಗಿ ನನ್ನನ್ನು ಉಜ್ಜೀವಿಸಮಾಡು.
150 ಜನರು ನನಗೆ ವಿರೋಧವಾಗಿ ಸಂಚುಗಳನ್ನು ಮಾಡುತ್ತಿದ್ದಾರೆ. ಅವರು ನಿನ್ನ ಉಪದೇಶಗಳನ್ನು ಅನುಸರಿಸುವುದಿಲ್ಲ.
151 ಯೆಹೋವನೇ, ನೀನು ನನಗೆ ಸಮೀಪವಾಗಿರುವೆ. ನಿನ್ನ ಆಜ್ಞೆಗಳೆಲ್ಲಾ ನಂಬಿಕೆಗೆ ಯೋಗ್ಯವಾಗಿವೆ.
152 ನಿನ್ನ ಉಪದೇಶಗಳು ಶಾಶ್ವತವಾಗಿವೆ. ಅದನ್ನು ನಾನು ಬಹುಕಾಲದ ಹಿಂದೆಯೇ ನಿನ್ನ ಒಡಂಬಡಿಕೆಯ ಮೂಲಕ ಕಲಿತುಕೊಂಡೆ.
153 ನನ್ನ ಕಷ್ಟವನ್ನು ನೋಡಿ ನನ್ನನ್ನು ಬಿಡಿಸು. ನಾನು ನಿನ್ನ ಉಪದೇಶಗಳನ್ನು ಮರೆತಿಲ್ಲ.
154 ವ್ಯಾಜ್ಯದಲ್ಲಿ ನನ್ನ ಪರವಾಗಿ ಹೋರಾಡಿ ನನ್ನನ್ನು ರಕ್ಷಿಸು. ನಿನ್ನ ವಾಗ್ದಾನಕ್ಕನುಸಾರವಾಗಿ ನನ್ನನ್ನು ಉಜ್ಜೀವಿಸಮಾಡು.
155 ದುಷ್ಟರು ನಿನ್ನ ಕಟ್ಟಳೆಗಳನ್ನು ಅನುಸರಿಸದ ಕಾರಣ ಅವರಿಗೆ ಜಯವಾಗುವುದಿಲ್ಲ.
156 ಯೆಹೋವನೇ, ನೀನು ಎಷ್ಟೋ ಕರುಣೆಯುಳ್ಳವನು. ನಿನ್ನ ಚಿತ್ತಾನುಸಾರವಾಗಿ ನನ್ನನ್ನು ಉಜ್ಜೀವನಗೊಳಿಸು.
157 ಅನೇಕ ವೈರಿಗಳು ನನಗೆ ಕೇಡು ಮಾಡಬೇಕೆಂದಿದ್ದಾರೆ. ನಾನಾದರೋ ನಿನ್ನ ಕಟ್ಟಳೆಗಳನ್ನು ಅನುಸರಿಸುತ್ತಲೇ ಇದ್ದೇನೆ.

158 ನಿನ್ನ ವಾಕ್ಯಕ್ಕೆ ವಿಧೇಯರಾಗದ ಆ ದ್ರೋಹಿಗಳನ್ನು ನೋಡಿದರೆ ನನಗೆ ಅಸಹ್ಯವಾಗುತ್ತದೆ.
159 ಯೆಹೋವನೇ, ನಿನ್ನ ಆಜ್ಞೆಗಳಿಗೆ ಆಸಕ್ತಿಯಿಂದ ವಿಧೇಯನಾಗಿದ್ದೇನೆ. ನಿನ್ನ ಪೂರ್ಣಪ್ರೀತಿಯಿಂದ ನನ್ನನ್ನು ಉಜ್ಜೀವಿಸಮಾಡು.
160 ನಿನ್ನ ವಾಕ್ಯಗಳೆಲ್ಲಾ ಸತ್ಯವಾಗಿವೆ. ನಿನ್ನ ನೀತಿಯ ಕಟ್ಟಳೆಗಳು ಶಾಶ್ವತವಾಗಿವೆ.
161 ಅಧಿಪತಿಗಳು ನಿಷ್ಕಾರಣವಾಗಿ ನನ್ನ ಮೇಲೆ ಆಕ್ರಮಣ ಮಾಡಿದರು. ನಾನಾದರೋ ನಿನ್ನ ಧರ್ಮಶಾಸ್ತ್ರವೊಂದಕ್ಕೇ ಭಯಪಡುವೆನು, ಅದೊಂದನ್ನೇ ಗೌರವಿಸುವೆನು.
162 ಮಹಾಭಂಡಾರವನ್ನು ಕಂಡುಕೊಂಡವನಂತೆ ನಾನು ನಿನ್ನ ವಾಕ್ಯದಲ್ಲಿ ಸಂತೋಷಿಸುವೆನು.
163 ನಾನು ಸುಳ್ಳುಗಳನ್ನು ದ್ವೇಷಿಸುವೆನು! ಅವು ನನಗೆ ಅಸಹ್ಯವಾಗಿವೆ. ನಿನ್ನ ಉಪದೇಶಗಳು ನನಗೆ ಪ್ರಿಯವಾಗಿವೆ.
164 ನಿನ್ನ ನೀತಿಯಕಟ್ಟಳೆಗಳಿಗಾಗಿ ನಾನು ದಿನಕ್ಕೆ ಏಳು ಸಲ ನಿನ್ನನ್ನು ಕೊಂಡಾಡುವೆನು.
165 ನಿನ್ನ ಉಪದೇಶಗಳನ್ನು ಪ್ರೀತಿಸುವವರಿಗೆ ಸಂಪೂರ್ಣ ಸಮಾಧಾನವಿರುವುದು. ಅವರನ್ನು ಯಾವುದೂ ಬೀಳಿಸಲಾರದು.
166 ಯೆಹೋವನೇ, ನಿನ್ನ ರಕ್ಷಣೆಗಾಗಿ ಕಾಯ್ದುಕೊಂಡಿದ್ದೇನೆ. ನಾನು ನಿನ್ನ ಆಜ್ಞೆಗಳಿಗೆ ವಿಧೇಯನಾಗಿದ್ದೇನೆ.
167 ನಾನು ನಿನ್ನ ಕಟ್ಟಳೆಗಳನ್ನು ಅನುಸರಿಸಿದೆನು. ಅವು ನನಗೆ ಬಹು ಪ್ರಿಯವಾಗಿವೆ.
168 ನಾನು ನಿನ್ನ ಒಡಂಬಡಿಕೆಗೂ ನಿನ್ನ ಆಜ್ಞೆಗಳಿಗೂ ವಿಧೇಯನಾಗಿದ್ದೇನೆ. ನನ್ನ ನಡತೆಯೆಲ್ಲಾ ನಿನಗೆ ಗೊತ್ತಿದೆ.
169 ಯೆಹೋವನೇ, ನನ್ನ ಕೂಗಿಗೆ ಕಿವಿಗೊಡು. ನಿನ್ನ ವಾಗ್ದಾನಕ್ಕನುಸಾರವಾಗಿ ನನ್ನನ್ನು ಜ್ಞಾನಿಯನ್ನಾಗಿ ಮಾಡು.
170 ನನ್ನ ಪ್ರಾರ್ಥನೆಗೆ ಕಿವಿಗೊಡು. ನಿನ್ನ ವಾಗ್ದಾನಕ್ಕನುಸಾರವಾಗಿ ನನ್ನನ್ನು ರಕ್ಷಿಸು.
171 ನೀನು ನಿನ್ನ ಕಟ್ಟಳೆಗಳನ್ನು ನನಗೆ ಕಲಿಸಿಕೊಟ್ಟದ್ದರಿಂದ ಸ್ತುತಿಗೀತೆಗಳು ನನ್ನಿಂದ ಹೊರಡುತ್ತವೆ.
172 ನನ್ನ ನಾಲಿಗೆಯು ನಿನ್ನ ವಾಕ್ಯವನ್ನು ಗಾಯನ ಮಾಡಲಿ. ನಿನ್ನ ಕಟ್ಟಳೆಗಳೆಲ್ಲಾ ನೀತಿಯ ಕಟ್ಟಳೆಗಳಾಗಿವೆ.
173 ನಾನು ನಿನ್ನ ಆಜ್ಞೆಗಳನ್ನು ಅನುಸರಿಸಲು ನಿರ್ಧರಿಸಿರುವುದರಿಂದ ಕೈಚಾಚಿ ಸಹಾಯಮಾಡು.
174 ನಿನ್ನಲ್ಲಿ ರಕ್ಷಣೆಗಾಗಿ ಪ್ರಾರ್ಥಿಸುವೆ. ನಿನ್ನ ಉಪದೇಶಗಳು ನನ್ನನ್ನು ಸಂತೋಷಗೊಳಿಸುತ್ತವೆ.
175 ನಾನು ಜೀವದಿಂದಿದ್ದು ನಿನ್ನನ್ನು ಕೊಂಡಾಡುವಂತೆ ಮಾಡು. ನಿನ್ನ ಕಟ್ಟಳೆಗಳು ನನಗೆ ಸಹಾಯಮಾಡಲಿ.
176 ನಾನು ಕಳೆದುಹೋದ ಕುರಿಯಂತೆ ಅಲೆದಾಡುತ್ತಿದ್ದೇನೆ. ನನಗೋಸ್ಕರ ಹುಡುಕುತ್ತಾ ಬಾ. ನಿನ್ನ ಸೇವಕನಾದ ನಾನು ನಿನ್ನ ಆಜ್ಞೆಗಳನ್ನು ಮರೆತುಬಿಟ್ಟಿಲ್ಲ.

## ಕೀರ್ತನೆ 120

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ನಾನು ಆಪತ್ತಿನಲ್ಲಿದ್ದಾಗ ಯೆಹೋವನಿಗೆ ಮೊರೆಯಿಟ್ಟೆನು. ಆತನು ನನಗೆ ಸದುತ್ತರವನ್ನು ದಯಪಾಲಿಸಿದನು.
2 ಯೆಹೋವನೇ, ಸುಳ್ಳಾಡುವ ವಂಚಕರಿಂದ ನನ್ನನ್ನು ರಕ್ಷಿಸು.
3 ಸುಳ್ಳುಗಾರರೇ, ನಿಮಗೆ ದೇವರಿಂದ ಬರುವ ದಂಡನೆಯನ್ನು ಬಲ್ಲಿರಾ?
4 ಯುದ್ಧವೀರನ ತೀಕ್ಷ್ಣವಾದ ಬಾಣದಿಂದಲೂ ಉರಿಯುವ ಕೆಂಡಗಳಿಂದಲೂ ದೇವರು ನಿಮ್ಮನ್ನು ದಂಡಿಸುವನು.
5 ಸುಳ್ಳುಗಾರರಾದ ನಿಮ್ಮ ಸಮೀಪದಲ್ಲಿ ವಾಸಿಸುವುದು ಮೇಷೆಕಿನಲ್ಲಿಯೂ ಕೇದಾರಿನ ಗುಡಾರಗಳಲ್ಲಿಯೂ* ವಾಸಿಸುವಂತಿರುವುದು.
6 ಶಾಂತಿದ್ವೇಷಕರೊಂದಿಗೆ ನಾನು ಬಹುಕಾಲ ವಾಸಿಸಿದ್ದೇನೆ.
7 ಶಾಂತಿ ನೆಲೆಸಿರಲಿ ಎಂದು ನಾನು ಹೇಳಿದರೂ ಅವರು ಯುದ್ಧವನ್ನೇ ಇಷ್ಟಪಡುತ್ತಾರೆ.

## ಕೀರ್ತನೆ 121

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ.*

1 ನಾನು ಪರ್ವತಗಳ ಕಡೆಗೆ ನೋಡುತ್ತೇನೆ. ನನಗೆ ಸಹಾಯವು ಎಲ್ಲಿಂದ ಬರುವುದು?
2 ಭೂಮ್ಯಾಕಾಶಗಳ ಸೃಷ್ಟಿಕರ್ತನಾದ ಯೆಹೋವನಿಂದಲೇ ನನಗೆ ಸಹಾಯವು ಬರುವುದು.
3 ಆತನು ನಿನ್ನನ್ನು ಬೀಳಗೊಡಿಸುವುದಿಲ್ಲ; ನಿನ್ನ ಸಂರಕ್ಷಕನು ನಿದ್ರೆಹೋಗುವುದಿಲ್ಲ.
3 ಇಸ್ರೇಲಿನ ಸಂರಕ್ಷಕನು ತೂಕಡಿಸುವುದಿಲ್ಲ, ನಿದ್ರಿಸುವುದೂ ಇಲ್ಲ!
5 ನಿನ್ನನ್ನು ಕಾಯುವವನು ಯೆಹೋವನೇ. ನಿನ್ನನ್ನು ರಕ್ಷಿಸಲು ಆತನು ನಿನ್ನ ಬಲಗಡೆಯಲ್ಲಿ ನಿಂತಿದ್ದಾನೆ.
6 ಹಗಲಲ್ಲಿ ಸೂರ್ಯನೂ ರಾತ್ರಿಯಲ್ಲಿ ಚಂದ್ರನೂ ನಿನ್ನನ್ನು ಬಾಧಿಸುವುದಿಲ್ಲ.
7 ಯೆಹೋವನು ನಿನ್ನನ್ನು ಎಲ್ಲಾ ಅಪಾಯಗಳಿಂದ ರಕ್ಷಿಸುವನು; ನಿನ್ನ ಪ್ರಾಣವನ್ನು ಕಾಯುವನು,

---

**ಮೇಷಕಿನಲ್ಲಿಯೂ … ಕೇದಾರಿನ ಗುಡಾರಗಳಲ್ಲಿಯೂ** ಈ ಸ್ಥಳಗಳ ಜನರು ಪ್ರಖ್ಯಾತ ಹೋರಾಟಗಾರರು.

8 ನೀನು ಹೋಗುವಾಗಲೂ ಬರುವಾಗಲೂ ಯೆಹೋವನು ನಿನಗೆ ಸಹಾಯಮಾಡುವನು. ಆತನು ನಿನ್ನನ್ನು ಸದಾಕಾಲ ಕಾಪಾಡುವನು.

## ಕೀರ್ತನೆ 122

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

*ರಚನೆಗಾರ: ದಾವೀದ*

1 ‘‘ಯೆಹೋವನ ಆಲಯಕ್ಕೆ ಹೋಗೋಣ’’ ಎಂದು ಜನರು ಹೇಳಿದಾಗ ನನಗೆ ಬಹು ಸಂತೋಷವಾಯಿತು.

2 ನಾವು ಜೆರುಸಲೇಮಿನ ಬಾಗಿಲುಗಳ ಬಳಿಯಲ್ಲಿ ನಿಂತಿದ್ದೇವೆ.

3 ಇದು ಹೊಸ ಜೆರುಸಲೇಮ್! ಈ ಪಟ್ಟಣವು ಏಕೀಕರಣಗೊಂಡ ನಗರದಂತೆ ಮತ್ತೆ ಕಟ್ಟಲ್ಪಟ್ಟಿದೆ.

4 ಇಸ್ರೇಲಿನ ಕುಲಗಳವರು ಅಂದರೆ ಯೆಹೋವನ ಕುಲಗಳವರು ಯೆಹೋವನ ಹೆಸರನ್ನು ಕೊಂಡಾಡಲು ಅಲ್ಲಿಗೆ ಹೋಗುವರು.

5 ದಾವೀದನ ಕುಟುಂಬದ ರಾಜರುಗಳು ಜನರಿಗೆ ನ್ಯಾಯತೀರ್ಪು ನೀಡಲು ತಮ್ಮ ಸಿಂಹಾಸನಗಳನ್ನು ಅಲ್ಲಿ ಸ್ಥಾಪಿಸಿದರು.

6 ಜೆರುಸಲೇಮಿನ ಶಾಂತಿಗೋಸ್ಕರ ಪ್ರಾರ್ಥಿಸಿರಿ. ‘‘ನಿನ್ನನ್ನು ಪ್ರೀತಿಸುವ ಜನರು ಅಲ್ಲಿ ಶಾಂತಿಯನ್ನು ಕಂಡುಕೊಳ್ಳಲಿ. ನಿನ್ನ ಕೋಟೆಗಳೊಳಗೆ ಶಾಂತಿ ನೆಲಸಿರಲಿ. ನಿನ್ನ ಮಹಾ ಕಟ್ಟಡಗಳಲ್ಲಿ ಸುರಕ್ಷತೆಯಿರಲಿ.’’

7 ನನ್ನ ಸಹೋದರರ ಮತ್ತು ನೆರೆಯವರ ಒಳ್ಳೆಯದಕ್ಕಾಗಿ ಅಲ್ಲಿ ಶಾಂತಿ ನೆಲೆಸಿರಲೆಂದು ಪ್ರಾರ್ಥಿಸುವೆನು.

8 ನಮ್ಮ ದೇವರಾದ ಯೆಹೋವನ ಆಲಯಕ್ಕೋಸ್ಕರ ಈ ಪಟ್ಟಣಕ್ಕೆ ಒಳ್ಳೆಯದಾಗಲೆಂದು ಪ್ರಾರ್ಥಿಸುವೆನು.

## ಕೀರ್ತನೆ 123

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ಪರಲೋಕದಲ್ಲಿ ಸಿಂಹಾಸನಾರೂಢನಾಗಿರುವಾತನೇ ನಿನ್ನ ಕಡೆಗೆ ಕಣ್ಣೆತ್ತಿ ನೋಡುತ್ತಾ ಪ್ರಾರ್ಥಿಸುವೆನು.

2 ಸೇವಕರು ತಮಗೆ ಬೇಕಾದವುಗಳಿಗಾಗಿ ತಮ್ಮ ಯಜಮಾನರನ್ನು ಅವಲಂಬಿಸಿಕೊಳ್ಳುವರು; ಸೇವಕಿಯರು ತಮ್ಮ ಯಜಮಾನಿಯರನ್ನು ಅವಲಂಬಿಸಿಕೊಳ್ಳುವರು.

3 ಅಂತೆಯೇ, ನಾವು ನಮ್ಮ ದೇವರಾದ ಯೆಹೋವನನ್ನು ಅವಲಂಬಿಸಿಕೊಳ್ಳುವೆವು. ಆತನ ಕರುಣೆಯನ್ನೇ ನಿರೀಕ್ಷಿಸುವೆವು.

4 ಯೆಹೋವನೇ, ನಮಗೆ ಕರುಣೆ ತೋರು ಬಹು ಕಾಲದಿಂದ ನಾವು ಅವಮಾನಿತರಾಗಿದ್ದೇವೆ.

5 ಗರ್ವಿಷ್ಠರೂ ಮೊಂಡರೂ ನಮ್ಮನ್ನು ಸಾಕಷ್ಟು ಗೇಲಿ ಮಾಡಿದ್ದಾರೆ.

## ಕೀರ್ತನೆ 124

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

*ರಚನೆಗಾರ ದಾವೀದ*

1 ಯೆಹೋವನು ನಮ್ಮ ಕಡೆ ಇಲ್ಲದಿದ್ದಿದ್ದರೆ ನಮ್ಮ ಗತಿ ಏನಾಗುತ್ತಿತ್ತು? ಇಸ್ರೇಲರೇ, ನನಗೆ ಉತ್ತರ ಹೇಳಿ.

2 ವೈರಿಗಳು ನಮ್ಮ ಮೇಲೆ ಆಕ್ರಮಣ ಮಾಡಿದಾಗ ಯೆಹೋವನು ನಮ್ಮ ಕಡೆ ಇಲ್ಲದಿದ್ದಿದ್ದರೆ ನಮ್ಮ ಗತಿ ಏನಾಗುತ್ತಿತ್ತು?

2 ಶತ್ರುಗಳು ನಮ್ಮ ಮೇಲೆ ಕೋಪಗೊಂಡಾಗಲೆಲ್ಲಾ ನಮ್ಮನ್ನು ಜೀವಂತವಾಗಿ ನುಂಗಿಬಿಡುತ್ತಿದ್ದರು.

4 ಶತ್ರುಸೈನ್ಯಗಳು ನಮ್ಮನ್ನು ಕೊಚ್ಚಿಕೊಂಡು ಹೋಗುವ ಪ್ರವಾಹದಂತೆಯೂ ಮುಳುಗಿಸುವ ನದಿಯಂತೆಯೂ ಆಗಿರುತ್ತಿದ್ದರು.

5 ಆ ಗರ್ವಿಷ್ಠರು ನಮ್ಮ ಪಾಲಿಗೆ ಬಾಯಿಯವರೆಗೂ ಮೇಲೇರಿ ಮುಳುಗಿಸುವ ನೀರಿನಂತಾಗುತ್ತಿದ್ದರು.

6 ಯೆಹೋವನಿಗೆ ಸ್ತೋತ್ರವಾಗಲಿ! ನಮ್ಮ ಶತ್ರುಗಳು ನಮ್ಮನ್ನು ಹಿಡಿದು ಕೊಲ್ಲಲು ಯೆಹೋವನು ಅವಕಾಶ ಕೊಡಲಿಲ್ಲ.

7 ನಾವು ಬಲೆಯಿಂದ ತಪ್ಪಿಸಿಕೊಂಡ ಪಕ್ಷಿಯಂತಿದ್ದೇವೆ. ಬಲೆಯು ಹರಿದುಹೋದದ್ದರಿಂದ ನಾವು ತಪ್ಪಿಸಿಕೊಂಡೆವು.

8 ನಮಗೆ ಸಹಾಯವು ಯೆಹೋವನಿಂದಲೇ ಬಂದಿತು. ಭೂಮ್ಯಾಕಾಶಗಳನ್ನು ಸೃಷ್ಟಿಮಾಡಿದವನು ಆತನೇ.

## ಕೀರ್ತನೆ 125

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ಯೆಹೋವನಲ್ಲಿ ಭರವಸವಿಟ್ಟಿರುವವರು ಚೀಯೋನ್ ಪರ್ವತದಂತಿರುವರು. ಅವರೆಂದಿಗೂ ಕದಲದೆ ಶಾಶ್ವತವಾಗಿರುವರು.

2 ಪರ್ವತಗಳು ಜೆರುಸಲೇಮಿನ ಸುತ್ತಲೂ ಇವೆ. ಯೆಹೋವನು ತನ್ನ ಜನರ ಸುತ್ತಲೂ ಇರುವನು. ಆತನು ತನ್ನ ಜನರನ್ನು ಸದಾಕಾಲ ಸಂರಕ್ಷಿಸುವನು.

3 ದುಷ್ಟರು ನೀತಿವಂತರನ್ನು ಶಾಶ್ವತವಾಗಿ ಆಳುವುದಿಲ್ಲ. ಅವರು ಶಾಶ್ವತವಾಗಿ ಆಳಿದರೆ ನೀತಿವಂತರೂ ದುಷ್ಕೃತ್ಯಗಳನ್ನು ಮಾಡತೊಡಗಬಹುದು.

4 ಯೆಹೋವನೇ, ನೀತಿವಂತರಿಗೂ ಯಥಾರ್ಥವಂತರಿಗೂ ಉಪಕಾರಮಾಡು.

5 ದುಷ್ಟರು ಕುತಂತ್ರಗಳನ್ನು ಮಾಡುವರು. ಯೆಹೋವನು ಅವರನ್ನು ದಂಡಿಸುವನು. ಇಸ್ರೇಲಿನಲ್ಲಿ ಶಾಂತಿ ನೆಲೆಸಿರಲಿ.

## ಕೀರ್ತನೆ 126

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ಯೆಹೋವನು ನಮ್ಮನ್ನು ಸೆರೆಯಿಂದ ಬರಮಾಡಿದಾಗ ಅದು ಕನಸಿನಂತಿತ್ತು!
2 ನಾವು ನಗುತ್ತಿದ್ದೆವು; ಹರ್ಷಗೀತೆಗಳನ್ನು ಹಾಡುತ್ತಿದ್ದೆವು.
3 ''ಯೆಹೋವನು ಇಸ್ರೇಲರಿಗೆ ಮಹತ್ಕಾರ್ಯಗಳನ್ನು ಮಾಡಿದ್ದಾನೆ'' ಎಂದು ಅನ್ಯಜನಾಂಗಗಳು ಮಾತಾಡಿಕೊಂಡರು.
4 ಯೆಹೋವನೇ, ಬತ್ತಿಹೋದ ತೊರೆಗಳು ನೀರಿನಿಂದ ಮತ್ತೆ ತುಂಬಿ ಹರಿಯುವಂತೆ ನಮ್ಮನ್ನು ಬಿಡಿಸು.
5 ಅಳುತ್ತಾ ಬೀಜವನ್ನು ಬಿತ್ತುವವನು ಹರ್ಷದಿಂದ ಕೊಯ್ಯುವನು.
6 ಅಳುತ್ತಾ ಹೊಲಕ್ಕೆ ಬೀಜವನ್ನು ಹೊತ್ತುಕೊಂಡು ಹೋಗುವವನು ಹರ್ಷದಿಂದ ಸಿವುಡುಗಳನ್ನು ಹೊತ್ತುಕೊಂಡು ಬರುವನು!

## ಕೀರ್ತನೆ 127

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

*ರಚನೆಗಾರ ಸೊಲೋಮೋನ*

1 ಯೆಹೋವನು ಮನೆಯನ್ನು ಕಟ್ಟದಿದ್ದರೆ, ಕಟ್ಟುವವರ ಸಮಯವೆಲ್ಲಾ ವ್ಯರ್ಥ. ಯೆಹೋವನು ಪಟ್ಟಣವನ್ನು ಕಾಯದಿದ್ದರೆ, ಕಾವಲುಗಾರರ ಸಮಯವೆಲ್ಲಾ ವ್ಯರ್ಥ.
2 ಕೇವಲ ಹೊಟ್ಟೆಪಾಡಿಗಾಗಿ ಮುಂಜಾನೆಯಲ್ಲೇ ಎದ್ದು ರಾತ್ರಿಯವರೆಗೂ ದುಡಿಯುವುದು ಕೇವಲ ವ್ಯರ್ಥ. ಯಾಕಂದರೆ ದೇವರು ತನ್ನ ಪ್ರಿಯರಿಗೆ ಆಹಾರವನ್ನು ನಿದ್ರೆಯಲ್ಲೂ ದಯಪಾಲಿಸುವನು.
3 ಮಕ್ಕಳು ಯೆಹೋವನ ಕೊಡುಗೆ. ತಾಯಿಯ ಗರ್ಭಫಲವು ಆತನ ಬಹುಮಾನ.
4 ಯೌವನಸ್ಥನ ಗಂಡುಮಕ್ಕಳು ಸೈನಿಕನ ಬತ್ತಳಿಕೆಯಲ್ಲಿರುವ ಬಾಣಗಳಂತಿದ್ದಾರೆ.
5 ತನ್ನ ಬತ್ತಳಿಕೆಯಲ್ಲಿ ಗಂಡುಮಕ್ಕಳನ್ನು ತುಂಬುವವನು ಭಾಗ್ಯವಂತನಾಗಿದ್ದಾನೆ.
6 ಅವನಿಗೆ ಸೋಲೇ ಇಲ್ಲ. ಅವನ ಗಂಡುಮಕ್ಕಳು ಅವನ ಪರವಾಗಿಯೂ ಅವನ ಶತ್ರುಗಳ ವಿರೋಧವಾಗಿಯೂ ನ್ಯಾಯಸ್ಥಾನಗಳಲ್ಲಿ ವಾದಿಸುವರು.

## ಕೀರ್ತನೆ 128

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ಯೆಹೋವನಲ್ಲಿ ಭಯಭಕ್ತಿಯುಳ್ಳವರಾಗಿ ಆತನ ಚಿತ್ತಾನುಸಾರವಾಗಿ ಜೀವಿಸುವವರೆಲ್ಲರು ಧನ್ಯರಾಗಿದ್ದಾರೆ.
2 ನೀನು ದುಡಿದು ಸಂಪಾದಿಸಿದ್ದನ್ನು ನೀನೇ ಅನುಭವಿಸುವೆ. ನೀನು ಸಂತೋಷದಿಂದಿರುವೆ. ನಿನಗೆ ಒಳ್ಳೆಯದಾಗುವುದು.
3 ಮನೆಯಲ್ಲಿರುವ ನಿನ್ನ ಹೆಂಡತಿ ಫಲಭರಿತವಾದ ದ್ರಾಕ್ಷಾ ಬಳ್ಳಿಯಂತಿರುವಳು. ಊಟದ ಮೇಜಿನ ಸುತ್ತಲೂ ಕುಳಿತುಕೊಳ್ಳುವ ನಿನ್ನ ಮಕ್ಕಳು, ನೀನು ನೆಟ್ಟ ಆಲಿವ್ ಮರಗಳಂತಿರುವರು.
4 ಯೆಹೋವನು ತನ್ನಲ್ಲಿ ಭಯಭಕ್ತಿಯುಳ್ಳವರನ್ನು ಹೀಗೆಯೇ ಆಶೀರ್ವದಿಸುವನು.
5 ಯೆಹೋವನು ನಿನ್ನನ್ನು ಚೀಯೋನಿನಿಂದ ಆಶೀರ್ವದಿಸಲಿ. ನಿನ್ನ ಜೀವಮಾನವೆಲ್ಲಾ ನೀನು ಜೆರುಸಲೇಮಿನಲ್ಲಿ ಆಶೀರ್ವಾದಗಳನ್ನು ಅನುಭವಿಸುವಂತಾಗಲಿ.
6 ನೀನು ಜೀವದಿಂದಿದ್ದು ನಿನ್ನ ಮೊಮ್ಮಕ್ಕಳನ್ನು ಕಾಣುವಂತಾಗಲಿ. ಇಸ್ರೇಲಿನಲ್ಲಿ ಶಾಂತಿ ನೆಲೆಸಿರಲಿ.

## ಕೀರ್ತನೆ 129

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ''ನನ್ನ ಜೀವಮಾನವೆಲ್ಲಾ ನನಗೆ ಅನೇಕ ಶತ್ರುಗಳಿದ್ದರು'' ಇಸ್ರೇಲೇ, ಆ ಶತ್ರುಗಳ ಬಗ್ಗೆ ನಮಗೆ ಹೇಳು.
2 ''ನನ್ನ ಜೀವಮಾನವೆಲ್ಲಾ ನನಗೆ ಅನೇಕ ಶತ್ರುಗಳಿದ್ದರು'' ಆದರೆ ಅವರೆಂದೂ ಗೆಲ್ಲಲಿಲ್ಲ.
3 ನನ್ನ ಬೆನ್ನಿನ ಮೇಲೆ ಹೊಡೆದು ಹೊಲವನ್ನು ಉಳುವಂತೆ ಗಾಯ ಮಾಡಿದರು.
4 ಆದರೆ ನೀತಿವಂತನಾದ ಯೆಹೋವನು ಹಗ್ಗಗಳನ್ನು ಕತ್ತರಿಸಿ ಆ ದುಷ್ಟರಿಂದ ನನ್ನನ್ನು ಬಿಡುಗಡೆ ಮಾಡಿದನು.
5 ಚೀಯೋನನ್ನು ದ್ವೇಷಿಸಿದ ಜನರು ಸೋತುಹೋದರು. ಅವರು ಹೋರಾಟವನ್ನು ನಿಲ್ಲಿಸಿ ಓಡಿಹೋದರು.
6 ಅವರು ಮನೆಯ ಮೇಲೆ ಬೆಳೆಯುವ ಹುಲ್ಲಿನಂತಿದ್ದರು. ಅದು ಬೆಳೆಯುವುದಕ್ಕಿಂತ ಮೊದಲೇ ಒಣಗಿ ಹೋಗುವುದು.
7 ಅದನ್ನು ಕೊಯ್ಯುವವನ ಹಿಡಿಯೂ ತುಂಬುವುದಿಲ್ಲ ಸಿವುಡು ಕಟ್ಟುವವನ ಉಡಿಲೂ ತುಂಬುವುದಿಲ್ಲ.
8 ಅವರ ಸಮೀಪದಲ್ಲಿ ನಡೆದುಹೋಗುವವರು, ''ಯೆಹೋವನು ನಿಮ್ಮನ್ನು ಆಶೀರ್ವದಿಸಲಿ'' ಎಂದು ಹೇಳುವುದಿಲ್ಲ. ''ಯೆಹೋವನ ಹೆಸರಿನಲ್ಲಿ ನಿಮಗೆ ಆಶೀರ್ವಾದವಾಗಲಿ ''ಎಂದು ಜನರು ಅವರನ್ನು ಆಶೀರ್ವದಿಸುವುದಿಲ್ಲ.

## ಕೀರ್ತನೆ 130

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ.*

1 ಯೆಹೋವನೇ, ಮಹಾ ಇಕ್ಕಟ್ಟಿನಲ್ಲಿ ಸಿಕ್ಕಿಕೊಂಡಿದ್ದೇನೆ; ಸಹಾಯಕ್ಕಾಗಿ ನಿನ್ನನ್ನೇ ಕೂಗಿಕೊಳ್ಳುತ್ತಿದ್ದೇನೆ.

2 ನನ್ನ ಒಡೆಯನೇ, ನನಗೆ ಕಿವಿಗೊಡು. ನನ್ನ ಮೊರೆಯನ್ನು ಆಲಿಸು.
3 ಯೆಹೋವನೇ, ನೀನು ಮನುಷ್ಯರನ್ನು ಅವರೆಲ್ಲರ ಪಾಪಗಳಿಗೆ ತಕ್ಕಂತೆ ದಂಡಿಸಿದರೆ ಒಬ್ಬನೂ ಜೀವಂತವಾಗಿ ಉಳಿಯಲಾರ.
4 ಯೆಹೋವನೇ, ನಿನ್ನ ಜನರನ್ನು ಕ್ಷಮಿಸು. ಆಗ, ನಿನ್ನನ್ನು ಆರಾಧಿಸುವುದಕ್ಕೆ ಜನರಿರುವರು.
5 ನಾನು ಯೆಹೋವನ ಸಹಾಯಕ್ಕಾಗಿ ಕಾಯುತ್ತಿದ್ದೇನೆ. ನನ್ನ ಪ್ರಾಣವು ಆತನಿಗಾಗಿ ಕಾದುಕೊಂಡಿರುವುದು. ಯೆಹೋವನ ನುಡಿಯನ್ನು ನಂಬಿಕೊಂಡಿದ್ದೇನೆ.
6 ನಾನು ನನ್ನ ಒಡೆಯನಿಗಾಗಿ ಮುಂಜಾನೆಗೋಸ್ಕರ ಎದುರು ನೋಡುತ್ತಿರುವ ಕಾವಲುಗಾರರಂತೆ ನಿರೀಕ್ಷಿಸುತ್ತಿದ್ದೇನೆ.
7 ಇಸ್ರೇಲೇ, ಯೆಹೋವನಲ್ಲಿ ಭರವಸವಿಡು. ಆತನಲ್ಲಿ ಮಾತ್ರ ನಿಜವಾದ ಪ್ರೀತಿಯಿದೆ. ಆತನು ನಮ್ಮನ್ನು ಯಾವಾಗಲೂ ರಕ್ಷಿಸುವನು.
8 ಆತನು ಇಸ್ರೇಲರ ಎಲ್ಲಾ ಪಾಪಗಳನ್ನು ಕ್ಷಮಿಸುವನು.

## ಕೀರ್ತನೆ 131

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

1 ಯೆಹೋವನೇ, ನನ್ನ ಹೃದಯದಲ್ಲಿ ಗರ್ವವಿಲ್ಲ. ನನ್ನ ಕಣ್ಣುಗಳಲ್ಲಿ ಸೊಕ್ಕಿಲ್ಲ. ಮಹಾಕಾರ್ಯಗಳನ್ನಾಗಲಿ ಅಸಾಧ್ಯ ಕಾರ್ಯಗಳನ್ನಾಗಲಿ ಮಾಡಲು ನಾನು ಪ್ರಯತ್ನಿಸುವುದಿಲ್ಲ.
2 ನಾನು ಸಮಾಧಾನದಿಂದಿರುವೆ. ನನ್ನ ಆತ್ಮವು ನೆಮ್ಮದಿಯಿಂದಿದೆ.
3 ತನ್ನ ತಾಯಿಯ ತೋಳುಗಳಲ್ಲಿ ಸಂತೃಪ್ತಿಯಾಗಿರುವ ಮಗುವಿನಂತೆ ನನ್ನ ಆತ್ಮವು ಸಮಾಧಾನದಿಂದಲೂ ನೆಮ್ಮದಿಯಿಂದಲೂ ಇದೆ.
4 ಇಸ್ರೇಲೇ, ಯೆಹೋವನಲ್ಲಿ ಭರವಿಸವಿಡು. ಈಗಲೂ ಆತನಲ್ಲಿ ಭರವಸವಿಡು. ಎಂದೆಂದಿಗೂ ಆತನಲ್ಲಿ ಭರವಸವಿಡು!

## ಕೀರ್ತನೆ 132

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ.*

1 ಯೆಹೋವನೇ, ದಾವೀದನು ಅನುಭವಿಸಿದ ಕಷ್ಟವನ್ನು ಜ್ಞಾಪಿಸಿಕೊ.
2 ದಾವೀದನು ಯೆಹೋವನಿಗೆ ವಿಶೇಷವಾದ ವಾಗ್ದಾನವನ್ನು ಮಾಡಿದನು; ಇಸ್ರೇಲರ ಶೂರನಾದ ದೇವರಿಗೆ ಆತನು ವಿಶೇಷವಾದ ಹರಕೆಯೊಂದನ್ನು ಮಾಡಿಕೊಂಡನು.
3 ‘‘ನಾನು ಯೆಹೋವನಿಗೋಸ್ಕರ ಒಂದು ಆಲಯವನ್ನು ಕಟ್ಟುವವರೆಗೆ ನನ್ನ ಮನೆಯೊಳಗೆ ಪ್ರವೇಶಿಸುವುದಿಲ್ಲ; ನನ್ನ ಹಾಸಿಗೆಯ ಮೇಲೆ ಮಲಗಿಕೊಳ್ಳುವುದಿಲ್ಲ;
4 ನಾನು ನಿದ್ರಿಸುವುದೂ ಇಲ್ಲ; ನನ್ನ ಕಣ್ಣುಗಳಿಗೆ ವಿಶ್ರಾಂತಿಯನ್ನು ಕೊಡುವುದೂ ಇಲ್ಲ.
5 ಇಸ್ರೇಲರ ಶೂರನಾದ ದೇವರಿಗೆ ಒಂದು ಆಲಯವನ್ನು ಕಟ್ಟುವೆನು’’ ಎಂದು ದಾವೀದನು ಹೇಳಿದನು.
6 ನಾವು ಅದರ ಬಗ್ಗೆ ಎಫ್ರಾತದಲ್ಲಿ* ಕೇಳಿದೆವು. ನಾವು ಒಡಂಬಡಿಕೆಯ ಪೆಟ್ಟಿಗೆಯನ್ನು ಕಿರ್ಯತ್ಯಾರೀಮಿನಲ್ಲಿ ಕಂಡುಕೊಂಡೆವು.
7 ಬನ್ನಿರಿ, ಆತನ ಪವಿತ್ರ ಗುಡಾರಕ್ಕೆ ಹೋಗೋಣ; ಆತನ ಪಾದಪೀಠದ* ಮುಂದೆ ಆರಾಧಿಸೋಣ .
8 ಯೆಹೋವನೇ, ನಿನ್ನ ವಿಶ್ರಾಂತಿಯ ಸ್ಥಳದಿಂದ ಎದ್ದೇಳು ನಿನ್ನ ಶಕ್ತಿಪೂರ್ಣವಾದ ಪೆಟ್ಟಿಗೆಯೊಂದಿಗೆ ಎದ್ದೇಳು.
9 ನಿನ್ನ ಯಾಜಕರುಗಳು ನೀತಿಯೆಂಬ ವಸ್ತ್ರವನ್ನು ಧರಿಸಿಕೊಂಡಿದ್ದಾರೆ. ನಿನ್ನ ಭಕ್ತರು ಉಲ್ಲಾಸಿಸಲಿ.
10 ನಿನ್ನ ಸೇವಕನಾದ ದಾವೀದನಿಗೆ ನೀನು ವಾಗ್ದಾನ ಮಾಡಿರುವೆ. ನೀನು ಅಭಿಷೇಕಿಸಿರುವ ರಾಜನನ್ನು ತಿರಸ್ಕರಿಸಬೇಡ.
11 ಯೆಹೋವನು ದಾವೀದನಿಗೆ ಸ್ಥಿರವಾದ ವಾಗ್ದಾನವನ್ನು ಮಾಡಿದನು. ಆತನು ಅದನ್ನು ಬದಲಾಯಿಸುವುದೇ ಇಲ್ಲ. ನಿನ್ನ ಸಂತಾನದವರನ್ನು ನಿನ್ನ ಸಿಂಹಾಸನದ ಮೇಲೆ ಕುಳ್ಳಿರಿಸುವೆನು.
12 ‘‘ನಿನ್ನ ಮಕ್ಕಳು ನನ್ನ ಒಡಂಬಡಿಕೆಗೂ ನಾನು ಆಜ್ಞಾಪಿಸಿದ ಕಟ್ಟಳೆಗಳಿಗೂ ವಿಧೇಯರಾದರೆ, ನಿನ್ನ ಸಂತಾನದ ಒಬ್ಬನು ಯಾವಾಗಲೂ ರಾಜನಾಗಿರುವನು.’’
13 ಯೆಹೋವನು ತನ್ನ ಆಲಯಕ್ಕಾಗಿ ಚೀಯೋನನ್ನೇ ಆರಿಸಿಕೊಂಡನು.
14 ‘‘ಇದು ನನ್ನ ಶಾಶ್ವತ ನಿವಾಸಸ್ಥಾನ. ನಾನು ಇಲ್ಲೇ ಆಸನಾರೂಢನಾಗಿರುವೆನು. ಇದೇ ನನಗೆ ಇಷ್ಟವಾದ ಸ್ಥಳ.
15 ನಾನು ಚೀಯೋನಿಗೆ ಬೇಕಾದದ್ದನ್ನೆಲ್ಲಾ ಒದಗಿಸುವೆನು; ಇಲ್ಲಿಯ ಬಡವರಿಗೂ ಆಹಾರವನ್ನು ಸಮೃದ್ಧಿಯಾಗಿ ದಯಪಾಲಿಸುವೆನು;
16 ಯಾಜಕರುಗಳಿಗೆ ರಕ್ಷಣೆಯೆಂಬ ವಸ್ತ್ರವನ್ನು ಹೊದಿಸುವೆನು. ನನ್ನ ಭಕ್ತರು ಉಲ್ಲಾಸಿಸುವರು.
17 ಇಲ್ಲಿಯೇ ನಾನು ದಾವೀದನನ್ನು ಬಲಗೊಳಿಸುವೆನು. ನಾನು ಅಭಿಷೇಕಿಸಿದ ಅವನಿಗೆ ದೀಪವನ್ನು ಒದಗಿಸುವೆನು.
18 ನಾನು ಅವನ ಶತ್ರುಗಳಿಗೆ ನಾಚಿಕೆಯೆಂಬ ವಸ್ತ್ರವನ್ನು ಹೊದಿಸುವೆನು. ಅವನ ರಾಜ್ಯವನ್ನಾದರೋ ಅಭಿವೃದ್ಧಿಗೊಳಿಸುವೆನು.’’

---

**ಎಫ್ರಾತ** ಬೇತ್ಲೆಹೇಮಿನ ಮತ್ತೊಂದು ಹೆಸರು. ದಾವೀದನು ಹುಟ್ಟಿದ ಪಟ್ಟಣ.

**ಪಾದಪೀಠ** ಒಡಂಬಡಿಕೆಯ ಪೆಟ್ಟಿಗೆ, ಪವಿತ್ರಗುಡಾರ ಅಥವಾ ದೇವಾಲಯ ಎಂಬರ್ಥಗಳನ್ನು ಸಹ ಇದು ಕೊಡಬಹುದು.

## ಕೀರ್ತನೆ 133

*ದೇವಾಲಯಕ್ಕೆ ಹೋಗುವಾಗ ಹಾಡುವ ಗೀತೆ*

*ರಚನೆಗಾಗರ ದಾವೀದ*

1 ಆಹಾ, ಸಹೋದರರು ಅನ್ಯೋನ್ಯತೆಯಿಂದಿರುವುದು
ಎಷ್ಟೋ ಒಳ್ಳೆಯದು, ಎಷ್ಟೋ ರಮ್ಯವಾದದ್ದು.
2 ಅದು ಯಾಜಕನ ತಲೆಯ ಮೇಲೆ ಹಾಕಲ್ಪಟ್ಟು
ಆರೋನನ ಗಡ್ಡಕ್ಕೂ ಅಲ್ಲಿಂದ ಅವನ ಉಡುಪುಗಳ
ಮೇಲೆಯೂ ಇಳಿದುಬರುವ ಪರಿಮಳ
ತೈಲದಂತಿರುವುದು;
3 ಅದು ಹೆರ್ಮೋನ್ ಪರ್ವತದಿಂದ ಹುಟ್ಟಿ
ಚೀಯೋನ್ ಪರ್ವತದ ಮೇಲೆ ಬೀಳುವ ದಟ್ಟವಾದ
ಮಂಜಿನಂತಿರುವುದು.
4 ಯೆಹೋವನು ನಿತ್ಯಜೀವವೆಂಬ ತನ್ನ ಆಶೀರ್ವಾದ
ವನ್ನು ಅನುಗ್ರಹಿಸಿದ್ದು ಚೀಯೋನಿನಲ್ಲಿಯೇ.

## ಕೀರ್ತನೆ 134

*ದೇವಾಯಲಕ್ಕೆ ಹೋಗುವಾಗ ಹಾಡುವ ಗೀತೆ*

1 ಯೆಹೋವನ ಸೇವಕರೆಲ್ಲರೇ, ಆತನನ್ನು ಕೊಂಡಾ
ಡಿರಿ. ಇಡೀ ರಾತ್ರಿ ದೇವಾಲಯದಲ್ಲಿ ಸೇವೆ
ಮಾಡಿದವರೇ, ಆತನಿಗೆ ಸ್ತೋತ್ರಮಾಡಿರಿ.
2 ಸೇವಕರೇ, ನಿಮ್ಮ ಕೈಗಳನ್ನು ಮೇಲೆತ್ತಿ ಯೆಹೋವ
ನನ್ನು ಕೊಂಡಾಡಿರಿ.
3 ಯೆಹೋವನು ನಿಮ್ಮನ್ನು ಚೀಯೋನಿನಿಂದ ಆಶೀರ್ವ
ದಿಸಲಿ. ಯೆಹೋವನು ಆಕಾಶವನ್ನೂ ಭೂಮಿ
ಯನ್ನೂ ಸೃಷ್ಟಿಮಾಡಿದನು.

## ಕೀರ್ತನೆ 135

1 ಯೆಹೋವನಿಗೆ ಸ್ತೋತ್ರವಾಗಲಿ! ಯೆಹೋವನ
ಸೇವಕರೇ, ಆತನ ಹೆಸರನ್ನು ಸ್ತುತಿಸಿರಿ!
2 ಯೆಹೋವನ ಆಲಯದಲ್ಲಿ ನಿಂತಿರುವವರೇ, ಆತ
ನನ್ನು ಸ್ತುತಿಸಿರಿ! ದೇವಾಲಯದ ಅಂಗಳದಲ್ಲಿ ನಿಂತಿರು
ವವರೇ, ಆತನನ್ನು ಸ್ತುತಿಸಿರಿ!
3 ಯೆಹೋವನಿಗೆ ಸ್ತೋತ್ರ ಮಾಡಿರಿ, ಯಾಕಂದರೆ
ಆತನು ಒಳ್ಳೆಯವನು. ಆತನ ಹೆಸರನ್ನು ಸ್ತುತಿಸಿರಿ,
ಅದು ಮನೋಹರವಾಗಿದೆ.
4 ಯೆಹೋವನು ಯಾಕೋಬನನ್ನು* ಆರಿಸಿ
ಕೊಂಡನು. ಇಸ್ರೇಲ್, ಆತನಿಗೆ ಸೇರಿದ್ದು.
5 ಯೆಹೋವನು ಮಹೋನ್ನತನೆಂದೂ ನಮ್ಮ ಒಡೆ
ಯನು ಬೇರೆಲ್ಲಾ ದೇವರುಗಳಿಗಿಂತ ಮಹೋನ್ನತ
ನೆಂದೂ ನಮಗೆ ಗೊತ್ತಿದೆ.
6 ಯೆಹೋವನು ಆಕಾಶದಲ್ಲಿಯೂ ಭೂಮಿಯ
ಲ್ಲಿಯೂ ಸಮುದ್ರಗಳಲ್ಲಿಯೂ ಆಳವಾದ ಸಾಗರ
ಗಳಲ್ಲಿಯೂ ತನ್ನ ಇಷ್ಟಾನುಸಾರವಾಗಿ ಮಾಡುವನು.
7 ಆತನು ಭೂಮಿಯ ಮೇಲೆಲ್ಲಾ ಮೋಡಗಳನ್ನು ಏರ
ಮಾಡುವನು; ಮಿಂಚನ್ನೂ ಮಳೆಯನ್ನೂ ಬರ
ಮಾಡುವನು; ಗಾಳಿಯನ್ನು ಬೀಸಮಾಡುವನು.
8 ಆತನು ಈಜಿಪ್ಟಿನಲ್ಲಿ ಚೊಚ್ಚಲು ಪುರುಷರನ್ನೂ ಪ್ರಾಣಿ
ಗಳನ್ನೂ ನಾಶಮಾಡಿದನು.
9 ಆತನು ಈಜಿಪ್ಟಿನಲ್ಲಿ ಅನೇಕ ಅದ್ಭುತಕಾರ್ಯಗಳನ್ನು
ಮತ್ತು ಮಹತ್ಕಾರ್ಯಗಳನ್ನು ಫರೋಹನಿಗೂ ಅವನ
ಸೇವಕರುಗಳಿಗೂ ವಿರೋಧವಾಗಿ ಮಾಡಿದನು.
10 ಆತನು ಅನೇಕ ಜನಾಂಗಗಳನ್ನು ಸೋಲಿಸಿದನು.
ಬಲಿಷ್ಠ ರಾಜರುಗಳನ್ನು ಕೊಂದುಹಾಕಿದನು.
11 ಆತನು ಅಮೋರಿಯರ ರಾಜನಾದ ಸೀಹೋನನನ್ನು
ಸೋಲಿಸಿದನು; ಬಾಷಾನಿನ ರಾಜನಾದ ಓಗನನ್ನೂ
ಕಾನಾನ್ ದೇಶದ ಎಲ್ಲಾ ಜನಾಂಗಗಳನ್ನೂ
ಸೋಲಿಸಿದನು.
12 ಆತನು ಅವರ ದೇಶವನ್ನು ತನ್ನ ಜನರಾದ ಇಸ್ರೇಲರಿಗೆ
ಕೊಟ್ಟನು.
13 ಯೆಹೋವನೇ, ನೀನು ಸದಾಕಾಲ ಪ್ರಸಿದ್ಧನಾಗಿರುವೆ!
ಯೆಹೋವನೇ, ಜನರು ನಿನ್ನನ್ನು ಸದಾಕಾಲ ನೆನಸಿ
ಕೊಳ್ಳುವರು.
14 ಯೆಹೋವನು ಜನಾಂಗಗಳನ್ನು ದಂಡಿಸಿದನು ತನ್ನ
ಜನರಿಗಾದರೋ ಕರುಣೆಯುಳ್ಳವನಾಗಿದ್ದನು.
15 ಅನ್ಯಜನರ ದೇವರುಗಳು ಮನುಷ್ಯರಿಂದಲೇ
ಮಾಡಲ್ಪಟ್ಟ ಬೆಳ್ಳಿಬಂಗಾರಗಳ ಪ್ರತಿಮೆಗಳಾಗಿದ್ದವು.
16 ಆ ಪ್ರತಿಮೆಗಳಿಗೆ ಬಾಯಿಗಳಿದ್ದರೂ ಮಾತಾಡ
ಲಾಗಲಿಲ್ಲ; ಕಣ್ಣುಗಳಿದ್ದರೂ ನೋಡಲಾಗಲಿಲ್ಲ;
17 ಆ ಪ್ರತಿಮೆಗಳಿಗೆ ಕಿವಿಗಳಿದ್ದರೂ ಕೇಳಲಾಗಲಿಲ್ಲ;
ಮೂಗುಗಳಿದ್ದರೂ ಮೂಸಿನೋಡಲಾಗಲಿಲ್ಲ;
18 ಆ ಪ್ರತಿಮೆಗಳನ್ನು ಮಾಡಿದವರೂ ಅವುಗಳಂತೆಯೇ
ಆಗುವರು! ಯಾಕಂದರೆ, ಅವರು ಸಹಾಯಕ್ಕಾಗಿ ಆ
ಪ್ರತಿಮೆಗಳನ್ನೇ ನಂಬಿಕೊಂಡಿದ್ದಾರೆ.
19 ಇಸ್ರೇಲ್ ಮನೆತನದವರೇ ಯೆಹೋವನನ್ನು
ಕೊಂಡಾಡಿರಿ. ಆರೋನನ ಮನೆತನದವರೇ,
ಯೆಹೋವನನ್ನು ಸ್ತುತಿಸಿರಿ.
20 ಲೇವಿಯ ಮನೆತನದವರೇ, ಯೆಹೋವನನ್ನು
ಕೊಂಡಾಡಿರಿ! ಯೆಹೋವನ ಭಕ್ತರೇ, ಆತನನ್ನು
ಸ್ತುತಿಸಿರಿ.
21 ಯೆಹೋವನಿಗೆ ಚೀಯೋನಿನಿಂದಲೂ ಆತನ ವಾಸ
ಸ್ಥಾನವಾದ ಜೆರುಸಲೇಮಿನಿಂದಲೂ ಸ್ತೋತ್ರ
ವಾಗಲಿ! ಯೆಹೋವನಿಗೆ ಸ್ತೋತ್ರವಾಗಲಿ!

---

**ಯಾಕೋಬ್** ಇಸ್ರೇಲಿನ ಮತ್ತೊಂದು ಹೆಸರು. ನೋಡಿ ಆದಿಕಾಂಡ 32 22-28.

## ಕೀರ್ತನೆ 136

1 ಯೆಹೋವನಿಗೆ ಕೃತಜ್ಞತಾಸ್ತುತಿಮಾಡಿರಿ; ಆತನು ಒಳ್ಳೆಯವನು. ಆತನ ಪ್ರೀತಿ ಶಾಶ್ವತವಾದದ್ದು.
2 ದೇವಾಧಿದೇವನಿಗೆ ಸ್ತೋತ್ರಮಾಡಿರಿ! ಆತನ ಪ್ರೀತಿ ಶಾಶ್ವತವಾದದ್ದು.
3 ಪ್ರಭುಗಳ ಪ್ರಭುವಿಗೆ ಸ್ತೋತ್ರಮಾಡಿರಿ. ಆತನ ಪ್ರೀತಿ ಶಾಶ್ವತವಾದದ್ದು.
4 ಮಹತ್ಕಾರ್ಯಗಳನ್ನು ಮಾಡಬಲ್ಲ ಆತನಿಗೆ ಸ್ತೋತ್ರ ಮಾಡಿರಿ. ಆತನ ಪ್ರೀತಿ ಶಾಶ್ವತವಾದದ್ದು.
5 ಜ್ಞಾನದಿಂದ ಆಕಾಶವನ್ನು ನಿರ್ಮಿಸಿದ ಆತನೊಬ್ಬನನ್ನೇ ಸ್ತುತಿಸಿರಿ! ಆತನ ಪ್ರೀತಿ ಶಾಶ್ವತವಾದದ್ದು.
6 ಆತನು ಭೂಮಿಯನ್ನು ಜಲರಾಶಿಗಳ ಮೇಲೆ ಹಾಸಿದ್ದಾನೆ. ಆತನ ಪ್ರೀತಿ ಶಾಶ್ವತವಾದದ್ದು.
7 ಆತನು ಮಹಾಬೆಳಕುಗಳನ್ನು ಸೃಷ್ಟಿಮಾಡಿದನು, ಆತನ ಪ್ರೀತಿ ಶಾಶ್ವತವಾದದ್ದು.
8 ಹಗಲನ್ನು ಆಳುವುದಕ್ಕಾಗಿ ಆತನು ಸೂರ್ಯನನ್ನು ಸೃಷ್ಟಿ ಮಾಡಿದನು ಆತನ ಪ್ರೀತಿ ಶಾಶ್ವತವಾದದ್ದು.
9 ರಾತ್ರಿಯನ್ನು ಅಳುವುದಕ್ಕಾಗಿ ಆತನು ಚಂದ್ರನನ್ನೂ ನಕ್ಷತ್ರಗಳನ್ನೂ ಸೃಷ್ಟಿಮಾಡಿದನು. ಆತನ ಪ್ರೀತಿ ಶಾಶ್ವತವಾದದ್ದು.
10 ಆತನು ಈಜಿಪ್ಟಿನಲ್ಲಿ ಚೊಚ್ಚಲು ಪುರುಷರನ್ನೂ ಪ್ರಾಣಿಗಳನ್ನೂ ಸಂಹರಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
11 ಆತನು ಇಸ್ರೇಲರನ್ನು ಈಜಿಪ್ಟಿನಿಂದ ಹೊರತಂದನು. ಆತನ ಪ್ರೀತಿ ಶಾಶ್ವತವಾದದ್ದು.
12 ಆತನು ತನ್ನ ಮಹಾಶಕ್ತಿಯನ್ನೂ ಬಲವನ್ನೂ ತೋರಿದನು. ಆತನ ಪ್ರೀತಿ ಶಾಶ್ವತವಾದದ್ದು.
13 ಆತನು ಕೆಂಪು ಸಮುದ್ರವನ್ನು ಎರಡು ಭಾಗವನ್ನಾಗಿ ಮಾಡಿದನು ಆತನ ಪ್ರೀತಿ ಶಾಶ್ವತವಾದದ್ದು.
14 ಆತನು ಇಸ್ರೇಲರನ್ನು ಸಮುದ್ರದ ಮಧ್ಯದಲ್ಲಿ ನಡೆಸಿದನು. ಆತನ ಪ್ರೀತಿ ಶಾಶ್ವತವಾದದ್ದು.
15 ಆತನು ಫರೋಹನನ್ನೂ ಅವನ ಸೈನ್ಯವನ್ನೂ ಕೆಂಪು ಸಮುದ್ರದಲ್ಲಿ ಮುಳುಗಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
16 ಆತನು ತನ್ನ ಜನರನ್ನು ಅರಣ್ಯದೊಳಗೆ ನಡೆಸಿದನು. ಆತನ ಪ್ರೀತಿ ಶಾಶ್ವತವಾದದ್ದು.
17 ಆತನು ಶಕ್ತಿಯುತರಾದ ರಾಜರುಗಳನ್ನು ಸೋಲಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
18 ಆತನು ಬಲಿಷ್ಟರಾದ ರಾಜರುಗಳನ್ನು ಸೋಲಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
19 ಆತನು ಅಮೋರಿಯರ ರಾಜನಾದ ಸೀಹೋನನನ್ನು ಸೋಲಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
20 ಆತನು ಬಾಷಾನಿನ ರಾಜನಾದ ಓಗನನ್ನು ಸೋಲಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
21 ಆತನು ಅವರ ದೇಶಗಳನ್ನು ಇಸ್ರೇಲರಿಗೆ ಕೊಟ್ಟನು. ಆತನ ಪ್ರೀತಿ ಶಾಶ್ವತವಾದದು.
22 ಆತನು ಆ ದೇಶಗಳನ್ನು ಇಸ್ರೇಲರಿಗೆ ಉಡುಗೊರೆಯಾಗಿ ಕೊಟ್ಟನು. ಆತನ ಪ್ರೀತಿ ಶಾಶ್ವತವಾದದ್ದು.
23 ನಾವು ಸೋತುಹೋಗಿದ್ದಾಗ ಆತನು ನಮ್ಮನ್ನು ಜ್ಞಾಪಿಸಿಕೊಂಡನು. ಆತನ ಪ್ರೀತಿ ಶಾಶ್ವತವಾದದ್ದು.
24 ಆತನು ನಮ್ಮನ್ನು ನಮ್ಮ ಶತ್ರುಗಳಿಂದ ರಕ್ಷಿಸಿದನು. ಆತನ ಪ್ರೀತಿ ಶಾಶ್ವತವಾದದ್ದು.
25 ಆತನು ಪ್ರತಿಯೊಬ್ಬರಿಗೂ ಆಹಾರವನ್ನು ಕೊಡುವನು, ಆತನ ಪ್ರೀತಿ ಶಾಶ್ವತವಾದದ್ದು.
26 ಪರಲೋಕದ ದೇವರನ್ನು ಸ್ತುತಿಸಿರಿ! ಆತನ ಪ್ರೀತಿ ಶಾಶ್ವತವಾದದ್ದು.

## ಕೀರ್ತನೆ 137

1 ನಾವು ಬಾಬಿಲೋನ್ ದೇಶದ ನದಿಗಳ ಬಳಿಯಲ್ಲಿ ಕುಳಿತುಕೊಂಡು ಚೀಯೋನನ್ನು ನೆನಸಿಕೊಳ್ಳುತ್ತಾ ಅತ್ತೆವು.
2 ಸಮೀಪದಲ್ಲಿದ್ದ ನೀರವಂಜಿ ಮರಗಳಿಗೆ ನಾವು ನಮ್ಮ ಹಾರ್ಪ್‌ವಾದ್ಯಗಳನ್ನು ತೂಗುಹಾಕಿದವು.
3 ನಮ್ಮನ್ನು ಸೆರೆಹಿಡಿದಿದ್ದ ಜನರು ಬಾಬಿಲೋನಿನಲ್ಲಿ ನಮಗೆ ಚೀಯೋನಿನ ಕುರಿತು ಹರ್ಷಗೀತೆಗಳನ್ನು ಹಾಡಲು ಹೇಳಿದರು.
4 ಆದರೆ ಪರದೇಶದಲ್ಲಿ ಯೆಹೋವನ ಹಾಡುಗಳನ್ನು ನಾವು ಹಾಡುವಂತಿಲ್ಲ!
5 ಜೆರುಸಲೇಮೇ, ನಿನ್ನನ್ನು ನಾನೆಂದಾದರೂ ಮರೆಯುವುದಾದರೆ, ನಾನು ಮತ್ತೆಂದಿಗೂ ಹಾಡನ್ನು ಬಾರಿಸದಂತಾಗಲಿ.
6 ಜೆರುಸಲೇಮೇ, ನಿನ್ನನ್ನು ನಾನೆಂದಾದರೂ ಮರೆಯುವುದಾದರೆ, ನಾನು ಮತ್ತೆಂದಿಗೂ ಹಾಡಲು ಶಕ್ತನಾಗದಂತಾಗಲಿ. ನಾನೆಂದಿಗೂ ನಿನ್ನನ್ನು ಮರೆಯುವುದಿಲ್ಲವೆಂದು ಪ್ರಮಾಣ ಮಾಡುವೆ.
7 ಜೆರುಸಲೇಮೇ, ನಿನ್ನ ವಿಷಯದಲ್ಲೇ ನಾನು ಅತ್ಯಾನಂದ ಪಡುವೆನೆಂದು ಪ್ರಮಾಣ ಮಾಡುವೆ.
8 ಬಾಬಿಲೋನೇ, ನೀನು ನಾಶವಾಗುವೆ! ನಿನಗೆ ತಕ್ಕ ದಂಡನೆಯನ್ನು ಕೊಡುವವನು ಧನ್ಯನು. ನೀನು ನಮ್ಮನ್ನು ನೋಯಿಸಿದಂತೆ ನಿನ್ನನ್ನೂ ನೋಯಿಸುವವನೇ ಧನ್ಯನು.
9 ನಿನ್ನ ಮಕ್ಕಳನ್ನು ಹಿಡಿದು ಬಂಡೆಗೆ ಅಪ್ಪಳಿಸುವವನೇ ಧನ್ಯನು.

## ಕೀರ್ತನೆ 138

*ಸ್ತುತಿಗೀತೆ ರಚನೆಗಾರ: ದಾವೀದ*

1 ಯೆಹೋವನೇ, ಪೂರ್ಣ ಹೃದಯದಿಂದ ನಿನ್ನನ್ನು

ಕೊಂಡಾಡುವೆನು. ನಿನ್ನ ಹಾಡುಗಳನ್ನು ಎಲ್ಲಾ ದೇವರುಗಳ ಎದುರಿನಲ್ಲಿ ಹಾಡುವೆನು.
2 ನಾನು ನಿನ್ನ ಪರಿಶುದ್ಧಾಲಯದ ಕಡೆಗೆ ಅಡ್ಡಬೀಳುವೆನು. ನಾನು ನಿನ್ನ ಹೆಸರನ್ನೂ ನಿನ್ನ ಪ್ರೀತಿಯನ್ನೂ ನಿನ್ನ ನಂಬಿಗಸ್ತಿಕೆಯನ್ನೂ ಕೊಂಡಾಡುವೆನು. ನೀನು ನಿನ್ನ ವಾಕ್ಯವನ್ನು ನೆರವೇರಿಸಿ ನಿನ್ನ ನಾಮಮಹತ್ವವನ್ನು ಹೆಚ್ಚಿಸಿರುವೆ.
3 ನಾನು ಸಹಾಯಕ್ಕಾಗಿ ನಿನಗೆ ಮೊರೆಯಿಟ್ಟಾಗ ನೀನು ನನಗೆ ಸದುತ್ತರವನ್ನು ದಯಪಾಲಿಸಿದೆ; ನನಗೆ ಬಲವನ್ನು ಅನುಗ್ರಹಿಸಿದೆ.
4 ಯೆಹೋವನೇ, ಭೂರಾಜರುಗಳೆಲ್ಲಾ ನಿನ್ನ ನುಡಿಗಳನ್ನು ಕೇಳಿ ನಿನ್ನನ್ನು ಕೊಂಡಾಡಬೇಕೆಂಬುದು ನನ್ನ ಅಪೇಕ್ಷೆ.
5 ಅವರೆಲ್ಲರೂ ಯೆಹೋವನ ಮಾರ್ಗವನ್ನು ಹಾಡಿ ಕೊಂಡಾಡುವರು; ಯಾಕಂದರೆ ಯೆಹೋವನ ಮಹಿಮೆಯು ಮಹತ್ವವಾದದ್ದು.
6 ಯೆಹೋವನೇ ಮಹೋನ್ನತನು. ಆದರೂ ಆತನು ದೀನರಿಗೋಸ್ಕರ ಚಿಂತಿಸುವನು. ಗರ್ವಿಷ್ಠರ ಕಾರ್ಯಗಳು ಆತನಿಗೆ ಗೊತ್ತಿವೆ. ಆದರೆ ಆತನು ಅವರಿಗೆ ದೂರವಾಗಿಯೇ ಇರುತ್ತಾನೆ.
7 ಯೆಹೋವನೇ, ನಾನು ಆಪತ್ತಿನಲ್ಲಿದ್ದರೆ, ನನ್ನ ಪ್ರಾಣವನ್ನು ಕಾಪಾಡು. ನನ್ನ ವೈರಿಗಳು ನನ್ನ ಮೇಲೆ ಕೋಪಗೊಂಡಿದ್ದರೆ, ನನ್ನನ್ನು ಅವರಿಂದ ರಕ್ಷಿಸು.
8 ಯೆಹೋವನೇ, ನಿನ್ನ ವಾಗ್ದಾನಗಳನ್ನು ನೆರವೇರಿಸು. ಯೆಹೋವನೇ, ನಿನ್ನ ಪ್ರೀತಿಯು ಶಾಶ್ವತವಾದದ್ದು. ನಮ್ಮನ್ನು ಸೃಷ್ಟಿಸಿದಾತನು ನೀನೇ. ನಮ್ಮನ್ನು ಕೈಬಿಡಬೇಡ!

## ಕೀರ್ತನೆ 139

*ಸ್ತುತಿಗೀತೆ*

*ರಚನೆಗಾರ: ದಾವೀದ*

1 ಯೆಹೋವನೇ ನೀನು ನನ್ನನ್ನು ಪರೀಕ್ಷಿಸಿ ಸಂಪೂರ್ಣವಾಗಿ ತಿಳಿದುಕೊಂಡಿರುವೆ.
2 ನಾನು ಕುಳಿತುಕೊಳ್ಳುವುದೂ ಎದ್ದೇಳುವುದೂ ನಿನಗೆ ತಿಳಿದದೆ, ನೀನು ಬಹುದೂರದಿಂದಲೇ ನನ್ನ ಆಲೋಚನೆಗಳನ್ನು ತಿಳಿದಿರುವೆ.
3 ನಾನು ಎಲ್ಲಿಗೇ ಹೋಗುತ್ತಿದ್ದರೂ ಎಲ್ಲೇ ಮಲಗಿದ್ದರೂ ನಿನಗೆ ತಿಳಿದಿರುತ್ತದೆ. ನನ್ನ ಕಾರ್ಯಗಳೆಲ್ಲಾ ನಿನಗೆ ತಿಳಿದದೆ.
4 ಯೆಹೋವನೇ, ನನ್ನ ಬಾಯಿಂದ ಮಾತುಗಳು ಹೊರಡುವುದಕ್ಕಿಂತ ಮೊದಲೇ ನಾನು ಹೇಳಬೇಕೆಂದಿರುವುದು ನಿನಗೆ ತಿಳಿದದೆ.
5 ನೀನು ನನ್ನ ಸುತ್ತಲೂ ಆವರಿಸಿರುವೆ; ನಿನ್ನ ಹಸ್ತವನ್ನು ನನ್ನ ಮೇಲೆ ಇಟ್ಟಿರುವೆ.
6 ನನ್ನ ವಿಷಯವಾಗಿ ನನಗಿಂತಲೂ ನಿನಗೆ ಎಷ್ಟೋ ಹೆಚ್ಚಾಗಿ ತಿಳಿದಿರುವುದು ನನ್ನನ್ನು ಆಶ್ಚರ್ಯಗೊಳಿಸಿದೆ ಅದನ್ನು ಗ್ರಹಿಸಿಕೊಳ್ಳುವುದಕ್ಕೂ ನನ್ನಿಂದಾಗದು.
7 ನಾನು ನಿನ್ನ ಆತ್ಮದಿಂದ ತಪ್ಪಿಸಿಕೊಳ್ಳಲು ಎಲ್ಲಿಗೆ ಓಡಿ ಹೋಗಲಿ! ನಿನ್ನ ಕಣ್ಣಿಗೆ ಮರೆಯಾಗಲು ಎಲ್ಲಿಗೆ ಹೋಗಲಿ?
8 ನಾನು ಪರಲೋಕಕ್ಕೆ ಏರಿಹೋದರೆ ಅಲ್ಲಿಯೂ ನೀನಿರುವೆ. ಪಾತಾಳಕ್ಕೆ ಇಳಿದುಹೋದರೆ ಅಲ್ಲಿಯೂ ನೀನಿರುವೆ.
9 ಪೂರ್ವದಿಕ್ಕಿನಲ್ಲಿ ಸೂರ್ಯನು ಉದಯಿಸುವ ಸ್ಥಳಕ್ಕೆ ಹೋದರೆ ಅಲ್ಲಿಯೂ ನೀನಿರುವೆ ಪಶ್ಚಿಮದಿಕ್ಕಿನಲ್ಲಿ ಸಮುದ್ರದ ಕಟ್ಟಕಡೆಗೆ ಹೋದರೆ ಅಲ್ಲಿಯೂ ನೀನಿರುವೆ.
10 ಅಲ್ಲಿಯೂ ನಿನ್ನ ಬಲಗೈ ನನ್ನನ್ನು ನಡೆಸುವುದು.
11 ನಾನು ನನ್ನನ್ನು ನಿನ್ನಿಂದ ಮರೆಮಾಡಿಕೊಳ್ಳಲು ಪ್ರಯತ್ನಿಸಿ, ''ಹಗಲು ಹೋಗಿ ಕತ್ತಲಾಯಿತು, ಖಂಡಿತವಾಗಿ ಕಾರ್ಗತ್ತಲೆಯು ನನ್ನನ್ನು ಮರೆಮಾಡುವುದು ''ಎಂದೆನ್ನಬಹುದು.
12 ಆದರೆ ಕಾರ್ಗತ್ತಲೆಯೂ ನಿನಗೆ ಕತ್ತಲೆಯಲ್ಲ. ಕಾರ್ಗತ್ತಲೆಯು ನಿನಗೆ ಹಗಲಿನಂತೆ ಪ್ರಕಾಶಮಾನವಾಗಿರುವುದು.
13 ನನ್ನ ಅಂತರೀಂದ್ರೀಯಗಳನ್ನು ಸೃಷ್ಟಿಮಾಡಿದವನೂ ನೀನೇ. ತಾಯಿಯ ಗರ್ಭದಲ್ಲಿ ನನ್ನನ್ನು ರೂಪಿಸಿದವನೂ ನೀನೇ.
14 ನಿನ್ನ ಎಲ್ಲಾ ಅದ್ಭುತಕಾರ್ಯಗಳಿಗಾಗಿ ನಿನಗೆ ಕೃತಜ್ಞತಾಸ್ತುತಿ ಮಾಡುವೆನು. ನಿನ್ನ ಕಾರ್ಯಗಳು ಅದ್ಭುತಕರವಾಗಿವೆಯೆಂದು ನಾನು ಗ್ರಹಿಸಿಕೊಂಡಿರುವೆ.
15 ನನ್ನ ವಿಷಯವೆಲ್ಲಾ ನಿನಗೆ ಗೊತ್ತಿದೆ. ತಾಯಿಗರ್ಭದಲ್ಲಿ ನನ್ನ ದೇಹ ರೂಪಗೊಳ್ಳುತ್ತಿದ್ದಾಗ ನನ್ನ ಎಲುಬುಗಳು ಬೆಳೆಯುವುದನ್ನೂ ನೀನು ನೋಡಿದೆ.
16 ನನ್ನ ದೇಹದ ಅಂಗಾಂಗಗಳು ಬೆಳೆಯುವುದನ್ನೂ ನೀನು ಗಮನಿಸಿದೆ. ನನ್ನ ಆಯುಷ್ಕಾಲದ ಮೊದಲನೆ ದಿನ ಆರಂಭವಾಗುವುಕ್ಕಿಂತ ಮೊದಲೇ ಅದರ ಎಲ್ಲಾ ದಿನಗಳು ನಿನ್ನ ಪುಸ್ತಕದಲ್ಲಿ ಬರೆಯಲ್ಪಟ್ಟವು.
17 ದೇವರೇ, ನಿನ್ನ ಆಲೋಚನೆಗಳು ನನಗೆ ಎಷ್ಟೋ ಮುಖ್ಯವಾಗಿವೆ. ಅವು ಅಸಂಖ್ಯಾತವಾಗಿವೆ.
18 ಅವುಗಳನ್ನು ಎಣಿಸುವುದಾದರೆ, ಸಮುದ್ರದ ಮರಳಿಗಿಂತಲೂ ಹೆಚ್ಚಾಗಿವೆ. ನಾನು ಎಚ್ಚರಗೊಂಡಾಗ ಮುಂಚಿನಂತೆ ನಿನ್ನೊಂದಿಗೇ ಇರುವೆನು.
19 ದೇವರೇ, ದುಷ್ಟರನ್ನು ಸಂಹರಿಸು. ಆ ಕೊಲೆಗಾರರನ್ನು ನನ್ನಿಂದ ದೂರಮಾಡು.
20 ಆ ದುಷ್ಟರು ನಿನ್ನನ್ನು ದೂಷಿಸುತ್ತಾರೆ. ಅಯೋಗ್ಯಕ್ಕಾಗಿ ನಿನ್ನ ಹೆಸರನ್ನು ಹೇಳುತ್ತಾರೆ.

21 ಯೆಹೋವನೇ, ನಿನ್ನನ್ನು ದ್ವೇಷಿಸುವವರನ್ನು ನಾನೂ ದ್ವೇಷಿಸುವೆನು.
22 ನಾನು ಅವರನ್ನು ಸಂಪೂರ್ಣವಾಗಿ ದ್ವೇಷಿಸುವೆನು! ನಿನ್ನ ವೈರಿಗಳನ್ನು ನನ್ನ ವೈರಿಗಳೆಂದೇ ಪರಿಗಣಿಸಿದ್ದೇನೆ.
23 ದೇವರೇ, ನನ್ನನ್ನು ಪರೀಕ್ಷಿಸಿ ನನ್ನ ಹೃದಯವನ್ನು ತಿಳಿದುಕೋ. ನನ್ನನ್ನು ಶೋಧಿಸಿ ನನ್ನ ಆಲೋಚನೆಗಳನ್ನು ಗ್ರಹಿಸಿಕೋ.
24 ನನ್ನಲ್ಲಿ ದುರಾಲೋಚನೆಗಳಿದ್ದರೆ ಕಂಡುಕೋ. ನನ್ನನ್ನು ನಿತ್ಯಮಾರ್ಗದಲ್ಲಿ ನಡೆಸು.

## ಕೀರ್ತನೆ 140

*ಸ್ತುತಿಗೀತೆ*

*ರಚನೆಗಾರ: ದಾವೀದ*

1 ಯೆಹೋವನೇ, ಕೆಡುಕರಿಂದ ನನ್ನನ್ನು ರಕ್ಷಿಸು. ಕ್ರೂರಿಗಳಿಂದ ನನ್ನನ್ನು ಕಾಪಾಡು.
2 ಅವರು ಕೇಡು ಮಾಡಬೇಕೆಂದಿದ್ದಾರೆ. ಅವರು ಯಾವಾಗಲೂ ಜಗಳವೆಬ್ಬಿಸುತ್ತಾರೆ.
3 ಅವರ ನಾಲಿಗೆಗಳು ಸರ್ಪಗಳಂತಿವೆ. ಅವರ ನಾಲಿಗೆಯ ಕೆಳಗೆ ಹಾವಿನ ವಿಷವಿದೆ.
4 ಯೆಹೋವನೇ, ದುಷ್ಟರಿಂದ ನನ್ನನ್ನು ರಕ್ಷಿಸು. ಕ್ರೂರಿಗಳಿಂದ ನನ್ನನ್ನು ಕಾಪಾಡು. ಅವರು ನನ್ನನ್ನು ಹಿಂದಟ್ಟಿ ನನಗೆ ಕೇಡು ಮಾಡಬೇಕೆಂದಿದ್ದಾರೆ.
5 ಆ ಗರ್ವಿಷ್ಠರು ನನಗೆ ಉರುಲನ್ನು ಒಡ್ಡಿದ್ದಾರೆ; ನನ್ನನ್ನು ಹಿಡಿಯಲು ಬಲೆಯನ್ನು ಹಾಸಿದ್ದಾರೆ; ನನ್ನ ದಾರಿಯಲ್ಲಿ ಬೋನನ್ನು ಇಟ್ಟಿದ್ದಾರೆ.
6 ಯೆಹೋವನೇ, ನನ್ನ ದೇವರು ನೀನೇ. ನನ್ನ ಪ್ರಾರ್ಥನೆಗೆ ಕಿವಿಗೊಡು.
7 ಯೆಹೋವನೇ, ನನ್ನ ಬಲಿಷ್ಠನಾದ ಒಡೆಯನು ನೀನೇ. ನನ್ನ ರಕ್ಷಕನೂ ನೀನೇ, ನನ್ನ ಶಿರಸ್ತ್ರಾಣವೂ ನೀನೇ.
8 ಯೆಹೋವನೇ, ಆ ದುಷ್ಟರ ದುರಾಶೆಯೂ ದುರಾಲೋಚನೆಯೂ ನೆರವೇರಲು ಬಿಡಬೇಡ.
9 ನನ್ನ ವೈರಿಗಳಿಗೆ ಜಯವಾಗಲು ಬಿಡಬೇಡ. ಅವರು ಕುಯುಕ್ತಿಗಳನ್ನು ಮಾಡುತ್ತಿದ್ದಾರೆ; ಅವುಗಳನ್ನು ವಿಫಲಗೊಳಿಸು.
10 ಅವರ ತಲೆಗಳ ಮೇಲೆ ಉರಿಯುವ ಕೆಂಡಗಳನ್ನು ಸುರಿದು ಬೆಂಕಿಯೊಳಗೆ ಎಸೆದುಬಿಡು; ಎಂದಿಗೂ ಹತ್ತಿಬರಲಾಗದ ಗುಂಡಿಯೊಳಗೆ ಅವರನ್ನು ಎಸೆದುಬಿಡು.
11 ಆ ಸುಳ್ಳುಗಾರರನ್ನು ಜೀವಂತವಾಗಿ ಉಳಿಸಬೇಡ. ಆ ಕೆಡುಕರಿಗೆ ಕೇಡುಗಳಾಗುವಂತೆ ಮಾಡು.
12 ಯೆಹೋವನು ದೀನರಿಗೆ ನ್ಯಾಯವಾದ ತೀರ್ಪನ್ನು ದಯಪಾಲಿಸುತ್ತಾನೆಂದು ನನಗೆ ಗೊತ್ತದೆ. ದೇವರು ಅಸಹಾಯಕರಿಗೆ ಸಹಾಯಮಾಡುವನು.
13 ನೀತಿವಂತರು ನಿನ್ನ ಹೆಸರನ್ನು ಕೊಂಡಾಡುತ್ತಾ ನಿನ್ನ ಸನ್ನಿಧಿಯಲ್ಲಿ ಜೀವಿಸುವರು.

## ಕೀರ್ತನೆ 141

*ಸ್ತುತಿಗೀತೆ*

ರಚನೆಗಾರ: ದಾವೀದ

1 ಯೆಹೋವನೇ, ಸಹಾಯಕ್ಕಾಗಿ ನಿನಗೆ ಮೊರೆಯಿಡುತ್ತಿದ್ದೇನೆ. ನನ್ನ ಪ್ರಾರ್ಥನೆಗೆ ಕಿವಿಗೊಡು. ಬೇಗನೆ ಬಂದು ನನಗೆ ಸಹಾಯಮಾಡು!
2 ನನ್ನ ಪ್ರಾರ್ಥನೆಯು ನಿನಗೆ ಧೂಪದಂತೆಯೂ ಸಾಯಂಕಾಲದ ಯಜ್ಞದಂತೆಯೂ ಸಮರ್ಪಕವಾಗಲಿ.
3 ಯೆಹೋವನೇ, ನನ್ನ ಮಾತುಗಳನ್ನು ಹಿಡಿತದಲ್ಲಿಟ್ಟುಕೊಳ್ಳುವುದಕ್ಕೂ, ವಿವೇಚಿಸಿ ನುಡಿಯುವುದಕ್ಕೂ ನನಗೆ ಸಹಾಯ ಮಾಡು.
4 ಕೆಟ್ಟದ್ದನ್ನು ಮಾಡಲು ನನಗೆ ಅವಕಾಶಕೊಡಬೇಡ. ಕೆಟ್ಟವರೊಂದಿಗೆ ಸೇರಿ ಕೆಟ್ಟದ್ದನ್ನು ಮಾಡದಂತೆ ನನ್ನನ್ನು ಕಾಪಾಡು. ಅವರು ಹರ್ಷಿಸುವಂಥವುಗಳಲ್ಲಿ ನಾನು ಪಾಲುಗಾರನಾಗದಂತೆ ನೋಡಿಕೋ.
5 ನೀತಿವಂತನು ನನ್ನನ್ನು ಸರಿಪಡಿಸಿದರೆ ಅದು ನನಗೇ ಒಳ್ಳೆಯದು. ನಿನ್ನ ಭಕ್ತರು ನನ್ನನ್ನು ಗದರಿಸಿದರೆ ಅದು ನನಗೇ ಒಳ್ಳೆಯದು. ಆದರೆ ಕೆಟ್ಟವರ ಕೆಟ್ಟ ಕೃತ್ಯಗಳ ವಿರೋಧವಾಗಿ ನಾನು ಯಾವಾಗಲೂ ಪ್ರಾರ್ಥಿಸುತ್ತೇನೆ.
6 ಅವರ ಅಧಿಪತಿಗಳು ದಬ್ಬಲ್ಪಡಲಿ. ನಾನು ಹೇಳಿದ್ದು ಸತ್ಯವೆಂದು ಆಗ ಜನರು ತಿಳಿದುಕೊಳ್ಳುವರು.
7 ಜನರು ಹೊಲವನ್ನು ಉತ್ತು ಹೆಂಟೆಗಳನ್ನು ಪುಡಿಮಾಡಿ ಚದರಿಸುವಂತೆಯೇ ಕೆಟ್ಟವರ ಎಲುಬುಗಳು ಅವರ ಸಮಾಧಿಗಳಲ್ಲಿ ಹರಡಿಕೊಂಡಿರುತ್ತವೆ.
8 ನನ್ನ ಒಡೆಯನಾದ ಯೆಹೋವನೇ, ಸಹಾಯಕ್ಕಾಗಿ ನಿನ್ನನ್ನೇ ಎದುರುನೋಡುವೆನು. ನಾನು ನಿನ್ನಲ್ಲಿ ಭರವಸವಿಟ್ಟಿದ್ದೇನೆ. ದಯವಿಟ್ಟು ನನ್ನನ್ನು ಮರಣಕ್ಕೀಡು ಮಾಡಬೇಡ.
9 ಕೆಟ್ಟವರು ನನಗೆ ಬಲೆಗಳನ್ನು ಒಡ್ಡಿದ್ದಾರೆ. ಅವರ ಬೋನುಗಳಿಂದ ನನ್ನನ್ನು ತಪ್ಪಿಸು.
10 ಅವರು ತಮ್ಮ ಬಲೆಗಳಿಗೆ ತಾವೇ ಸಿಕ್ಕಿಬೀಳಲಿ. ಆಗ ನಾನು ತಪ್ಪಿಸಿಕೊಳ್ಳುವೆನು.

## ಕೀರ್ತನೆ 142

*ದಾವೀದನು ಗುಹೆಯಲ್ಲಿದ್ದಾಗ ಮಾಡಿದ ಪ್ರಾರ್ಥನೆ*

*ರಚನೆಗಾರ: ದಾವೀದ.*

1 ನಾನು ಯೆಹೋವನಿಗೆ ಮೊರೆಯಿಡುವೆನು; ಯೆಹೋವನನ್ನು ಕೂಗಿಕೊಳ್ಳುವೆನು.

2 ನನ್ನ ಕಷ್ಟಗಳನ್ನೂ ಚಿಂತೆಗಳನ್ನೂ ಆತನಿಗೆ ಅರಿಕೆ ಮಾಡಿಕೊಳ್ಳುವೆನು.

3 ನನ್ನ ವೈರಿಗಳು ನನಗೆ ಉರುಲನ್ನು ಒಡ್ಡಿದ್ದಾರೆ. ನನ್ನ ಆತ್ಮವು ಕುಂದಿಹೋಗಿದೆ. ನನ್ನ ಮಾರ್ಗವನ್ನು ತಿಳಿದಿರುವಾತನು ನೀನೇ.

4 ನಾನು ಸುತ್ತಮುತ್ತ ನೋಡಿದರೂ ನನ್ನ ಸ್ನೇಹಿತರಲ್ಲಿ ಯಾರೂ ಕಾಣುತ್ತಿಲ್ಲ. ಓಡಿಹೋಗಲು ನನಗೆ ಯಾವ ಸ್ಥಳವೂ ಇಲ್ಲ. ನನ್ನನ್ನು ರಕ್ಷಿಸಲು ಯಾರೂ ಪ್ರಯತ್ನಿಸುತ್ತಿಲ್ಲ.

5 ಆದ್ದರಿಂದ ಯೆಹೋವನನ್ನು ಕೂಗಿಕೊಳ್ಳುವೆನು. ನನ್ನ ಆಶ್ರಯಸ್ಥಾನವೂ ನೀನೇ, ನನ್ನನ್ನು ಬದುಕಿಸ ಬಲ್ಲಾತನೂ ನೀನೇ ಎಂದು ಆತನಿಗೆ ಮೊರೆಯಿಡುವೆನು.

6 ಯೆಹೋವನೇ, ನನ್ನ ಪ್ರಾರ್ಥನೆಗೆ ಕಿವಿಗೊಡು. ನೀನು ನನಗೆ ಬೇಕೇಬೇಕು. ನನ್ನನ್ನು ಬೆನ್ನಟ್ಟುತ್ತಿರುವ ಜನರಿಂದ ನನ್ನನ್ನು ರಕ್ಷಿಸು. ಅವರು ನನಗಿಂತ ಬಹು ಬಲಿಷ್ಠರಾಗಿದ್ದಾರೆ.

7 ಈ ಉರುಲಿನಿಂದ ಪಾರಾಗಲು ನನಗೆ ಸಹಾಯ ಮಾಡು. ಯೆಹೋವನೇ, ಆಗ ನಾನು ನಿನ್ನ ಹೆಸರನ್ನು ಕೊಂಡಾ ಡುವೆನು. ನೀನು ನನ್ನನ್ನು ಕಾಪಾಡಿದ್ದರಿಂದ ನೀತಿವಂತರು ನನ್ನೊಂದಿಗೆ ನಿನ್ನನ್ನು ಕೊಂಡಾಡುವರು.

## ಕೀರ್ತನೆ 143

*ಸ್ತುತಿಗೀತೆ ರಚನೆಗಾರ: ದಾವೀದ*

1 ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳು. ನನ್ನ ಬಿನ್ನಹಕ್ಕೆ ಕಿವಿಗೊಡು. ನಿನ್ನ ನೀತಿಗೂ ನಂಬಿಗಸ್ತಿಕೆಗೂ ತಕ್ಕಂತೆ ನನ್ನ ಪ್ರಾರ್ಥನೆಗೆ ಉತ್ತರಕೊಡು.

2 ನಿನ್ನ ಸೇವಕನಾದ ನನಗೆ ತೀರ್ಪುಮಾಡಬೇಡ. ನನ್ನ ಇಡೀ ಜೀವಮಾನದಲ್ಲಿ ನಿರಪರಾಧಿಯೆಂಬ ತೀರ್ಪನ್ನು ಹೊಂದಲು ನನಗೆ ಸಾಧ್ಯವೇ ಇಲ್ಲ.

3 ಆದರೆ ನನ್ನ ಶತ್ರುಗಳು ನನ್ನನ್ನು ಬೆನ್ನಟ್ಟುತ್ತಿದ್ದಾರೆ. ಅವರು ನನ್ನ ಜೀವವನ್ನು ನೆಲಕ್ಕೆ ಹಾಕಿ ಜಜ್ಜಿದ್ದಾರೆ. ಬಹುಕಾಲದ ಹಿಂದೆ ಸತ್ತವರನ್ನು ಕಾರ್ಗತ್ತಲೆಯ ಸಮಾಧಿಗೆ ನೂಕುವಂತೆ ಅವರು ನನ್ನನ್ನು ನೂಕುತ್ತಿದ್ದಾರೆ.

4 ನನ್ನ ಆತ್ಮವು ಕುಂದಿಹೋಗಿದೆ. ನನ್ನ ಧೈರ್ಯವು ಕಳೆದುಹೋಗುತ್ತಿದೆ.

5 ಆದರೆ ಬಹುಕಾಲದ ಹಿಂದೆ ನಡೆದವುಗಳನ್ನು ಜ್ಞಾಪಿಸಿಕೊಳ್ಳುವೆನು. ನೀನು ಮಾಡಿದ ಅನೇಕ ಅದ್ಭುತ ಕಾರ್ಯಗಳನ್ನು ಆಲೋಚಿಸುವೆನು.

6 ನನ್ನ ಕೈಗಳನ್ನು ಮೇಲೆತ್ತಿ ನಿನಗೆ ಪ್ರಾರ್ಥಿಸುವೆನು. ಒಣಭೂಮಿಯು ಮಳೆಗಾಗಿ ಕಾಯುವಂತೆ ನಾನು ನಿನ್ನ ಸಹಾಯಕ್ಕಾಗಿ ಕಾಯುತ್ತಿದ್ದೇನೆ.

7 ಯೆಹೋವನೇ, ಬೇಗನೆ ಸದುತ್ತರವನ್ನು ದಯಪಾಲಿಸು. ನನ್ನ ಆತ್ಮವು ಕುಂದಿಹೋಗುತ್ತಿದೆ. ನೀನು ನನಗೆ ವಿಮುಖನಾಗಬೇಡ. ಸತ್ತು ಸಮಾಧಿಯಲ್ಲಿರುವವರಂತೆ ನನ್ನನ್ನು ಸಾವಿಗೀಡುಮಾಡಬೇಡ.

8 ಮುಂಜಾನೆಯಲ್ಲಿ ನಿನ್ನ ಶಾಶ್ವತ ಪ್ರೀತಿಯನ್ನು ನನಗೆ ತೋರಿಸು. ನಾನು ನಿನ್ನಲ್ಲಿ ಭರವಸವಿಟ್ಟಿದ್ದೇನೆ. ನಾನು ಮಾಡಬೇಕಾದವುಗಳನ್ನು ನನಗೆ ತೋರಿಸು. ನಾನು ನನ್ನ ಜೀವವನ್ನು ನಿನ್ನ ಕೈಗಳಲ್ಲಿ ಇಟ್ಟಿದ್ದೇನೆ!

9 ಯೆಹೋವನೇ, ನಿನ್ನನ್ನೇ ಆಶ್ರಯಿಸಿಕೊಂಡಿದ್ದೇನೆ; ಶತ್ರುಗಳಿಂದ ನನ್ನನ್ನು ರಕ್ಷಿಸು.

10 ನಿನ್ನ ಇಚ್ಛೆಗನುಸಾರವಾಗಿ ನಾನು ಮಾಡಬೇಕಾದುದನ್ನು ನನಗೆ ತೋರಿಸಿಕೊಡು. ನೀನೇ ನನ್ನ ದೇವರು. ನನಗೆ ಒಳ್ಳೆಯವನಾಗಿದ್ದು ಸುರಕ್ಷಿತವಾದ ದಾರಿಯಲ್ಲಿ ನಡೆಸು.

11 ಯೆಹೋವನೇ, ನನ್ನನ್ನು ಉಜ್ಜೀವಿಸಮಾಡು. ಆಗ ಜನರು ನಿನ್ನ ಹೆಸರನ್ನು ಕೊಂಡಾಡುವರು. ನೀನು ನಿಜವಾಗಿಯೂ ಒಳ್ಳೆಯವನೆಂಬುದನ್ನು ನನಗೆ ತೋರಿಸಿಕೊಡು. ನನ್ನನ್ನು ಶತ್ರುಗಳಿಂದ ರಕ್ಷಿಸು.

12 ನಿನ್ನ ಶಾಶ್ವತ ಪ್ರೀತಿಯನ್ನು ನನಗೆ ತೋರಿಸು. ನನ್ನನ್ನು ಕೊಲ್ಲಬೇಕೆಂದಿರುವ ಶತ್ರುಗಳನ್ನು ಸೋಲಿಸು. ನಾನು ನಿನ್ನ ಸೇವಕನಾಗಿರುವೆ.

## ಕೀರ್ತನೆ 144

*ರಚನೆಗಾರ: ದಾವೀದ*

1 ಯೆಹೋವನು ನನಗೆ ಬಂಡೆಯಾಗಿದ್ದಾನೆ. ಆತನಿಗೆ ಸ್ತೋತ್ರವಾಗಲಿ. ಆತನು ನನ್ನನ್ನು ಯುದ್ಧಕ್ಕೂ, ಕದನಕ್ಕೂ ತರಬೇತು ಮಾಡುವನು.

2 ಆತನು ನನ್ನನ್ನು ಪ್ರೀತಿಸುವ ದೇವರೂ ನನ್ನ ಕೋಟೆಯೂ ನನ್ನ ದುರ್ಗವೂ ನನ್ನ ರಕ್ಷಕನೂ ನನ್ನ ಗುರಾಣಿಯೂ, ನನ್ನ ಆಶ್ರಯವೂ ಆಗಿದ್ದಾನೆ.

3 ಯೆಹೋವನೇ, ಮನುಷ್ಯನು ಎಷ್ಟು ಮಾತ್ರದವನು? ನೀನು ಅವನನ್ನು ಯಾಕೆ ನೆನಸಬೇಕು?

4 ಮನುಷ್ಯನು ಕೇವಲ ಉಸಿರೇ. ಅವನ ಜೀವಮಾನವು ಬೇಗನೆ ಗತಿಸಿಹೋಗುವ ನೆರಳಿನಂತಿದೆ.

5 ಯೆಹೋವನೇ, ಆಕಾಶವನ್ನು ಹರಿದು ಇಳಿದು ಬಾ. ಪರ್ವತಗಳನ್ನು ಮುಟ್ಟು, ಆಗ ಅವುಗಳಿಂದ ಹೊಗೆಯು ಮೇಲೇರುವುದು.

6 ಸಿಡಿಲಿನಿಂದ ಶತ್ರುಗಳನ್ನು ಚದರಿಸಿಬಿಡು. ನಿನ್ನ ಬಾಣಗಳಿಂದ ಅವರನ್ನು ಓಡಿಸಿಬಿಡು.

7 ಮೇಲಣ ಲೋಕದಿಂದ ಕೈಚಾಚಿ ಮಹಾ ಜಲರಾಶಿಯಂತಿರುವ ನನ್ನ ಶತ್ರುಗಳಿಂದ ನನ್ನನ್ನು ಎಳೆದುಕೋ. ಅನ್ಯಜನರ ಕೈಯಿಂದ ನನ್ನನ್ನು ಬಿಡಿಸು.

8 ಅವರ ಬಾಯಿ ಸುಳ್ಳುಗಳಿಂದ ತುಂಬಿವೆ. ಅವರ ಬಲಗೈ ಮೋಸದಿಂದ ತುಂಬಿವೆ.

9 ಯೆಹೋವನೇ, ನಿನಗೆ ನೂತನ ಕೀರ್ತನೆಯನ್ನು ಹಾಡುವೆನು. ನಾನು ಹತ್ತುತಂತಿಗಳ ಹಾರ್ಪ್‌ವಾದ್ಯ ವನ್ನು ನುಡಿಸುತ್ತಾ ನಿನ್ನನ್ನು ಸ್ತುತಿಸುವೆನು.
10 ರಾಜರುಗಳಿಗೆ ಸಹಾಯಮಾಡಿ ಯುದ್ಧಗಳಲ್ಲಿ ಗೆಲ್ಲಿಸುವವನೂ ನೀನೇ. ನಿನ್ನ ಸೇವಕನಾದ ದಾವೀದ ನನ್ನು ಅವನ ಶತ್ರುಗಳ ಖಡ್ಗಗಳಿಂದ ರಕ್ಷಿಸಿದವನೂ ನೀನೇ.
11 ಈ ಅನ್ಯಜನರಿಂದ ನನ್ನನ್ನು ರಕ್ಷಿಸು. ಅವರ ಬಾಯಿ ಗಳು ಸುಳ್ಳುಗಳಿಂದ ತುಂಬಿವೆ. ಅವರ ಬಲಗೈಗಳು ಮೋಸದಿಂದ ತುಂಬಿವೆ.
12 ನಮ್ಮ ಯುವಕರು ಮಹಾವೃಕ್ಷಗಳಂತಿದ್ದಾರೆ. ನಮ್ಮ ಯುವತಿಯರು ಅರಮನೆಯಲ್ಲಿ ಸುಂದರವಾಗಿ ಕೆತ್ತಲ್ಪಟ್ಟ ಕಂಬಗಳಂತಿರುವರು.
13 ನಮ್ಮ ಕಣಜಗಳು ಸಕಲ ಬಗೆಯ ದವಸಧಾನ್ಯಗಳಿಂದ ತುಂಬಿರುತ್ತವೆ. ನಮ್ಮ ಹೊಲಗಳಲ್ಲಿರುವ ಕುರಿಗಳು ಸಾವಿರಾರು ಮರಿಗಳನ್ನು ಈಯುತ್ತವೆ.
14 ನಮ್ಮ ಸೈನಿಕರು ಸುರಕ್ಷಿತವಾಗಿದ್ದಾರೆ. ಯಾವ ಶತ್ರು ಗಳೂ ನುಗ್ಗಿ ಬರಲು ಪ್ರಯತ್ನಿಸುತ್ತಿಲ್ಲ. ನಾವು ಯುದ್ಧಕ್ಕೆ ಹೋಗುವುದೂ ಇಲ್ಲ; ನಮ್ಮ ಬೀದಿಗಳಲ್ಲಿ ಗೋಳಾಟವೂ ಇರುವುದಿಲ್ಲ.
15 ಇಂಥ ಸುಸ್ಥಿತಿಯಲ್ಲಿರುವ ಜನರೇ ಧನ್ಯರು. ಯಾರಿಗೆ ಯೆಹೋವನು ದೇವರಾಗಿರುತ್ತಾನೊ ಅವರೇ ಭಾಗ್ಯ ವಂತರು.

## ಕೀರ್ತನೆ 145

*ರಚನೆಗಾರ: ದಾವೀದ*

1 ನನ್ನ ದೇವರೇ, ನನ್ನ ರಾಜನೇ, ನಿನ್ನನ್ನು ಸ್ತುತಿಸುವೆನು; ನಿನ್ನ ಹೆಸರನ್ನು ಎಂದೆಂದಿಗೂ ಕೊಂಡಾಡುವೆನು.
2 ನಿನ್ನನ್ನು ಪ್ರತಿದಿನವೂ ಸ್ತುತಿಸುವೆನು. ನಿನ್ನ ಹೆಸರನ್ನು ಎಂದೆಂದಿಗೂ ಕೊಂಡಾಡುವೆನು.
3 ಯೆಹೋವನು ಮಹೋನ್ನತನೂ ಸ್ತುತಿಗೆ ಪಾತ್ರನೂ ಆಗಿದ್ದಾನೆ. ಆತನ ಮಹತ್ಕಾರ್ಯಗಳು ಅಸಂಖ್ಯಾತ ವಾಗಿವೆ.
4 ಯೆಹೋವನೇ, ನಿನ್ನ ಕಾರ್ಯಗಳನ್ನು ಜನರು ಎಂದೆಂದಿಗೂ ಸ್ತುತಿಸುವರು; ನಿನ್ನ ಮಹತ್ಕಾರ್ಯಗಳ ವಿಷಯವಾಗಿ ಜನರು ಬೇರೆಯವರಿಗೆ ಹೇಳುವರು.
5 ನಿನ್ನ ಪ್ರಭಾವವುಳ್ಳ ಮಹಿಮೆಯ ಕುರಿತು ಜನರು ಹೇಳುವರು. ನಾನು ನಿನ್ನ ಮಹತ್ಕಾರ್ಯಗಳನ್ನು ವರ್ಣಿಸುವೆನು.
6 ನಿನ್ನ ಅತ್ಯಾಶ್ಚರ್ಯಕರವಾದ ಕಾರ್ಯಗಳನ್ನು ಜನರು ಕೊಂಡಾಡುವರು. ನಿನ್ನ ಮಹತ್ಕಾರ್ಯಗಳನ್ನು ನಾನು ವರ್ಣಿಸುವೆನು.
7 ನಿನ್ನ ಒಳ್ಳೆಯಕಾರ್ಯಗಳ ಕುರಿತಾಗಿ ಜನರು ಹೇಳುವರು. ನಿನ್ನ ನೀತಿಯ ಕುರಿತಾಗಿ ಜನರು ಹಾಡುವರು.
8 ಯೆಹೋವನು ದಯೆಯುಳ್ಳವನೂ ಕನಿಕರವುಳ್ಳ ವನೂ ದೀರ್ಘಶಾಂತನೂ ಪ್ರೀತಿಪೂರ್ಣನೂ ಆಗಿದ್ದಾನೆ.
9 ಯೆಹೋವನು ಪ್ರತಿಯೊಬ್ಬನಿಗೂ ಒಳ್ಳೆಯವನಾಗಿ ದ್ದಾನೆ. ಆತನು ತಾನು ನಿರ್ಮಿಸಿದವುಗಳಿಗೆಲ್ಲಾ ಕನಿಕರ ತೋರಿಸುವನು.
10 ಯೆಹೋವನೇ, ನಿನ ಸೃಷ್ಟಿಯೆಲ್ಲವೂ ನಿನ್ನನ್ನು ಸ್ತುತಿ ಸುತ್ತವೆ. ನಿನ್ನ ಭಕ್ತರು ನಿನ್ನನ್ನು ಕೊಂಡಾಡುವರು.
11 ಅವರು ನಿನ್ನ ರಾಜ್ಯದ ಮಹತ್ವವನ್ನು ಕುರಿತು ಹೇಳುವರು. ನಿನ್ನ ಪರಾಕ್ರಮವನ್ನು ವರ್ಣಿಸುವರು.
12 ಹೀಗೆ ನಿನ್ನ ಮಹತ್ಕಾರ್ಯಗಳನ್ನು ಇತರ ಜನರು ತಿಳಿದುಕೊಳ್ಳುವರು. ನಿನ್ನ ರಾಜ್ಯದ ಮಹತ್ವವನ್ನೂ ವೈಭವವನ್ನೂ ಅವರು ತಿಳಿದುಕೊಳ್ಳುವರು.
13 ಯೆಹೋವನೇ, ನಿನ್ನ ರಾಜ್ಯವು ಶಾಶ್ವತವಾಗಿದೆ. ನೀನು ಎಂದೆಂದಿಗೂ ಆಳುವೆ.
14 ಯೆಹೋವನು ಬಿದ್ದುಹೋಗಿರುವವರನ್ನು ಮೇಲೆತ್ತು ವವನೂ; ಕುಗ್ಗಿಹೋದವರನ್ನು ಉದ್ಧರಿಸುವವನೂ ಆಗಿದ್ದಾನೆ.

15 ಎಲ್ಲಾ ಜೀವಿಗಳು ತಮ್ಮ ಆಹಾರಕ್ಕಾಗಿ ನಿನ್ನನ್ನೇ ನೋಡುತ್ತವೆ. ನೀನು ಸಮಯಕ್ಕೆ ಸರಿಯಾಗಿ ಅವುಗಳಿಗೆ ಆಹಾರವನ್ನು ಕೊಡುವೆ.
16 ನೀನು ಕೈಯನ್ನು ತೆರೆದು ಜೀವಿಗಳ ಅವಶ್ಯಕತೆ ಗಳನ್ನೆಲ್ಲಾ ಪೂರೈಸುವೆ.
17 ಯೆಹೋವನ ಕಾರ್ಯಗಳೆಲ್ಲ ನೀತಿಯುಳ್ಳವುಗ ಳಾಗಿವೆ. ಆತನ ಪ್ರತಿಯೊಂದು ಕಾರ್ಯದಲ್ಲೂ ಆತನ ಶಾಶ್ವತ ಪ್ರೀತಿ ತೋರಿಬರುವುದು.
18 ಯೆಹೋವನು ತನ್ನ ಭಕ್ತರಿಗೆ ಸಮೀಪವಾಗಿದ್ದಾನೆ. ಆತನು ತನ್ನನ್ನು ಯಥಾರ್ಥವಾಗಿ ಕರೆಯುವ ಪ್ರತಿ ಯೊಬ್ಬರಿಗೂ ಸಮೀಪವಾಗಿದ್ದಾನೆ.
19 ಆತನು ತನ್ನ ಭಕ್ತರ ಇಷ್ಟವನ್ನು ನೆರವೇರಿಸುವನು, ಆತನು ಅವರ ಮೊರೆಗೆ ಕಿವಿಗೊಟ್ಟು ಅವರನ್ನು ರಕ್ಷಿಸುವನು.
20 ಯೆಹೋವನು ತನ್ನನ್ನು ಪ್ರೀತಿಸುವ ಪ್ರತಿಯೊಬ್ಬ ರನ್ನೂ ಸಂರಕ್ಷಿಸುವನು, ದುಷ್ಟರನ್ನಾದರೊ ಆತನು ನಾಶ ಮಾಡುವನು.
21 ನಾನು ಯೆಹೋವನನ್ನು ಕೊಂಡಾಡುತ್ತೇನೆ! ಪ್ರತಿ ಯೊಬ್ಬರೂ ಆತನ ಪವಿತ್ರ ಹೆಸರನ್ನು ಸದಾಕಾಲ ಕೊಂಡಾಡಲಿ!

## ಕೀರ್ತನೆ 146

1 ಯೆಹೋವನಿಗೆ ಸ್ತೋತ್ರವಾಗಲಿ! ನನ್ನ ಮನವೇ,
ಯೆಹೋವನನ್ನು ಸ್ತುತಿಸು!
2 ನನ್ನ ಜೀವಮಾನವೆಲ್ಲಾ ಯೆಹೋವನನ್ನು ಸ್ತುತಿಸು
ವೆನು; ಆತನನ್ನು ಸಂಕೀರ್ತಿಸುವೆನು.
3 ಸಹಾಯಕ್ಕಾಗಿ ನಿಮ್ಮ ನಾಯಕರುಗಳನ್ನು ಅವಲಂಬಿಸಿ
ಕೊಳ್ಳಬೇಡಿ. ಮನುಷ್ಯರಲ್ಲಿ ಭರವಸವಿಡಬೇಡಿ,
ಅವರು ನಿಮ್ಮನ್ನು ರಕ್ಷಿಸಲಾರರು.
4 ಮನುಷ್ಯರು ಸತ್ತು ಸಮಾಧಿಗೆ ಸೇರುವರು. ಆಗ
ನಿಮಗೆ ಸಹಾಯಮಾಡಬೇಕೆಂಬ ಅವರ ಆಲೋಚನೆ
ಗಳೆಲ್ಲಾ ಅಳಿದುಹೋಗುತ್ತವೆ.
5 ಯಾರಿಗೆ ದೇವರು ಸಹಾಯಕನೋ; ಯಾರು ತಮ್ಮ
ದೇವರಾದ ಯೆಹೋವನಲ್ಲಿ ಭರವಸವಿಟ್ಟಿದ್ದಾರೊ,
ಅವರೇ ಭಾಗ್ಯವಂತರು.
6 ಯೆಹೋವನು ಆಕಾಶವನ್ನೂ ಭೂಮಿಯನ್ನೂ
ಸಮುದ್ರವನ್ನೂ ಅದರಲ್ಲಿರುವ ಪ್ರತಿಯೊಂದನ್ನೂ
ಸೃಷ್ಟಿಸಿದನು. ಆತನು ಅವುಗಳನ್ನು ಶಾಶ್ವತವಾಗಿ
ಸಂರಕ್ಷಿಸುವನು.
7 ಹಿಂಸೆಗೆ ಗುರಿಯಾಗಿರುವವರಿಗೆ ನ್ಯಾಯವನ್ನೂ;
ಹಸಿದವರಿಗೆ ಆಹಾರವನ್ನೂ ಕೊಡುವವನು ಆತನೇ.
ಯೆಹೋವನು ಸೆರೆಯಲ್ಲಿರುವವರನ್ನು ಬಿಡಿಸುವನು.
8 ಯೆಹೋವನು ಕುರುಡರಿಗೆ ದೃಷ್ಟಿಕೊಡುವನು.
ಯೆಹೋವನು ಕುಗ್ಗಿಹೋದವರನ್ನು ಉದ್ಧರಿಸುವನು
ಯೆಹೋವನು ನೀತಿವಂತರನ್ನು ಪ್ರೀತಿಸುವನು.
9 ಯೆಹೋವನು ನಮ್ಮ ದೇಶದಲ್ಲಿ ವಾಸವಾಗಿರುವ
ವಿದೇಶಿಯರನ್ನು ಕಾಪಾಡುತ್ತಾನೆ. ಆತನು ವಿಧವೆ
ಯರನ್ನೂ ಅನಾಥರನ್ನೂ ಪರಿಪಾಲಿಸುತ್ತಾನೆ. ಆದರೆ
ಆತನು ದುಷ್ಟರ ಆಲೋಚನೆಗಳನ್ನು ನಾಶ
ಮಾಡುವನು.
10 ಯೆಹೋವನು ಸದಾಕಾಲ ಆಳುವನು! ಚೀಯೋನೇ,
ನಿನ್ನ ದೇವರು ಶಾಶ್ವತವಾಗಿ ಆಳುವನು! ಯೆಹೋವ
ನಿಗೆ ಸ್ತೋತ್ರವಾಗಲಿ!

## ಕೀರ್ತನೆ 147

1 ಯೆಹೋವನನ್ನು ಸ್ತುತಿಸಿರಿ! ಆತನು ಒಳ್ಳೆಯವನು.
ನಮ್ಮ ದೇವರನ್ನು ಸಂಕೀರ್ತಿಸಿರಿ. ಆತನನ್ನು ಸ್ತುತಿಸು
ವುದು ಒಳ್ಳೆಯದೂ ಸಂತೋಷಕರವೂ ಆಗಿದೆ.
2 ಯೆಹೋವನು ಜೆರುಸಲೇಮನ್ನು ಕಟ್ಟಿದನು. ಸೆರೆ
ಯಾಳುಗಳಾಗಿ ಒಯ್ಯಲ್ಪಟ್ಟಿದ್ದ ಇಸ್ರೇಲರನ್ನು ಆತನು
ಹಿಂದಕ್ಕೆ ಕರೆತಂದನು.
3 ಅವರ ಒಡೆದ ಹೃದಯಗಳನ್ನು ಆತನು ವಾಸಿ ಮಾಡು
ವನು; ಅವರ ಗಾಯಗಳನ್ನು ಕಟ್ಟುವನು.
4 ಆತನು ನಕ್ಷತ್ರಗಳನ್ನು ಎಣಿಸುವನು. ಆತನಿಗೆ ಪ್ರತಿ
ಯೊಂದು ನಕ್ಷತ್ರದ ಹೆಸರು ತಿಳಿದಿದೆ.
5 ನಮ್ಮ ಒಡೆಯನು ಬಹು ದೊಡ್ಡವನೂ ಪರಾ
ಕ್ರಮಿಯೂ ಆಗಿದ್ದಾನೆ. ಆತನ ಜ್ಞಾನವು ಅಪರಿಮಿತ
ವಾಗಿದೆ.
6 ಯೆಹೋವನು ದೀನರಿಗೆ ಆಧಾರವಾಗಿದ್ದಾನೆ.
ದುಷ್ಟರನ್ನಾದರೊ ನಾಚಿಕೆಗೆ ಗುರಿಪಡಿಸುವನು.
7 ಯೆಹೋವನಿಗೆ ಕೃತಜ್ಞತಾಸ್ತುತಿ ಮಾಡಿರಿ. ನಮ್ಮ
ದೇವರನ್ನು ಹಾರ್ಪ್‌ವಾದ್ಯಗಳೊಂದಿಗೆ ಸ್ತುತಿಸಿರಿ.
8 ಆತನು ಆಕಾಶವನ್ನು ಮೋಡಗಳಿಂದ ತುಂಬಿಸುವನು;
ಭೂಮಿಗಾಗಿ ಮಳೆಯನ್ನು ಸುರಿಸುವನು; ಬೆಟ್ಟಗಳ
ಮೇಲೆ ಹುಲ್ಲನ್ನು ಬೆಳೆಯಮಾಡುವನು.
9 ದೇವರು ಪ್ರಾಣಿಗಳಿಗೂ ಪಕ್ಷಿಮರಿಗಳಿಗೂ ಆಹಾರ
ಕೊಡುವನು.
10 ಯುದ್ಧದ ಕುದುರೆಗಳಾಗಲೀ ಶಕ್ತಿಯುತರಾದ ಸೈನಿಕ
ರಾಗಲೀ ಆತನನ್ನು ಮೆಚ್ಚಿಸಲಾರವು.
11 ಯೆಹೋವನು ತನ್ನನ್ನು ಆರಾಧಿಸುವ ಜನರಲ್ಲೇ
ಸಂತೋಷ ಪಡುವನು. ಆತನು ತನ್ನ ಶಾಶ್ವತ ಪ್ರೀತಿ
ಯಲ್ಲಿ ಭರವಸವಿಟ್ಟಿರುವವರನ್ನು ಮೆಚ್ಚಿಕೊಳ್ಳುವನು.
12 ಜೆರುಸಲೇಮೇ, ಯೆಹೋವನನ್ನು ಸ್ತುತಿಸು!
ಚೀಯೋನೇ, ನಿನ್ನ ದೇವರನ್ನು ಸ್ತುತಿಸು!
13 ಜೆರುಸಲೇಮೇ, ದೇವರು ನಿನ್ನ ಬಾಗಿಲುಗಳ ಸರಳು
ಗಳನ್ನು ಬಲಪಡಿಸುವನು; ನಿನ್ನ ನಗರದಲ್ಲಿರುವ
ಜನರನ್ನು ಆಶೀರ್ವದಿಸುವನು.
14 ಆತನು ನಿಮ್ಮ ದೇಶದಲ್ಲಿ ಶಾಂತಿಯನ್ನು ನೆಲೆಗೊಳಿಸಿ
ದನು. ನಿಮ್ಮನ್ನು ಶ್ರೇಷ್ಠವಾದ ಗೋಧಿಯಿಂದ ತೃಪ್ತಿ
ಪಡಿಸಿದನು.
15 ಆತನು ಭೂಮಿಗೆ ಆಜ್ಞಾಪಿಸಲು ಅದು ಕೂಡಲೆ
ವಿಧೇಯವಾಗುತ್ತದೆ.
16 ನೆಲವು ಉಣ್ಣೆಯಂತೆ ಬಿಳುಪಾಗುವವರೆಗ ಆತನು
ಮಂಜನ್ನು ಬೀಳಿಸುವನು; ಹಿಮವನ್ನು ಗಾಳಿಯ
ಮೂಲಕ ಧೂಳಿನಂತೆ ಹರಡುವನು.
17 ಆತನು ಅಕಾಶದಿಂದ ಕಲ್ಲುಗಳಂತಿರುವ ಆಲಿಕಲ್ಲನ್ನು
ಸುರಿಸುವನು; ಯಾವನೂ ಚಳಿಯಲ್ಲಿ ಹೊರಗಡೆ
ಇರಲಾರನು.
18 ಆತನು ಮತ್ತೊಂದು ಆಜ್ಞೆಯನ್ನು ಹೊರಡಿಸುವನು;
ಆಗ ಬಿಸಿಗಾಳಿಯು ಮತ್ತೆ ಬೀಸುವುದು; ಮಂಜು
ಕರಗಿ ಹೋಗುವುದು. ನೀರು ಹರಿಯ
ತೊಡಗುವುದು.
19 ಆತನು ಯಾಕೋಬಿಗೆ (ಇಸ್ರೇಲಿಗೆ) ತನ್ನ ಆಜ್ಞೆಗಳನ್ನು
ಕೊಟ್ಟನು ಇಸ್ರೇಲಿಗೆ ತನ್ನ ಕಟ್ಟಳೆಗಳನ್ನೂ ನಿಯಮ
ಗಳನ್ನೂ ಕೊಟ್ಟನು.
20 ಆತನು ಬೇರೆ ಯಾವ ಜನಾಂಗದವರಿಗೂ ಹೀಗೆ
ಮಾಡಲಿಲ್ಲ. ಆತನು ಅನ್ಯಜನಾಂಗಗಳವರಿಗೆ ತನ್ನ

ಕಟ್ಟಳೆಗಳನ್ನು ಉಪದೇಶಿಸಲಿಲ್ಲ. ಯೆಹೋವನಿಗೆ
ಸ್ತೋತ್ರವಾಗಲಿ!

## ಕೀರ್ತನೆ 148

1 ಯೆಹೋವನಿಗೆ ಸ್ತೋತ್ರವಾಗಲಿ! ಮೇಲ್ಲೋಕದ
ಲ್ಲಿರುವ ದೇವದೂತರೇ, ಆಕಾಶಮಂಡಲದಿಂದ
ಯೆಹೋವನನ್ನು ಸ್ತುತಿಸಿರಿ!
2 ಎಲ್ಲಾ ದೂತರುಗಳೇ, ಆತನಿಗೆ ಸ್ತೋತ್ರಮಾಡಿರಿ!
ಆತನ ಸರ್ವಸೈನ್ಯಗಳೇ, ಆತನನ್ನು ಸ್ತುತಿಸಿರಿ!
3 ಸೂರ್ಯಚಂದ್ರರುಗಳೇ, ಆತನನ್ನು ಸ್ತುತಿಸಿರಿ! ಆಕಾಶ
ದಲ್ಲಿರುವ ನಕ್ಷತ್ರಗಳೇ, ಬೆಳಕುಗಳೇ, ಆತನನ್ನು ಸ್ತುತಿ
ಸಿರಿ! ಆತನಿಗೆ ಸ್ತೋತ್ರಮಾಡಿರಿ! ಆತನ ಸರ್ವಸೈನ್ಯಗಳೇ
ಆತನನ್ನು ಸ್ತುತಿಸಿರಿ!
4 ಉನ್ನತೋನ್ನತವಾದ ಆಕಾಶವೇ, ಆತನನ್ನು ಸ್ತುತಿಸು!
ಆಕಾಶದ ಮೇಲಿರುವ ನೀರುಗಳೇ ಆತನನ್ನು ಸ್ತುತಿಸಿರಿ!
5 ಯೆಹೋವನ ಹೆಸರನ್ನು ಸ್ತುತಿಸಿರಿ. ಆತನು ಆಜ್ಞಾಪಿ
ಸಿದಾಗ ನಾವೆಲ್ಲರೂ ಸೃಷ್ಟಿಸಲ್ಪಟ್ಟೆವು!
6 ಇವುಗಳೆಲ್ಲಾ ಶಾಶ್ವತವಾಗಿರುವಂತೆ ಆತನು ಮಾಡಿ
ದನು. ಎಂದಿಗೂ ಕೊನೆಗೊಳ್ಳದ ನಿಯಮಗಳನ್ನು
ಆತನು ಮಾಡಿದನು.
7 ಭೂಮಿಯ ಮೇಲಿರುವ ಸಮಸ್ತವೇ, ಯೆಹೋವನಿಗೆ
ಸ್ತೋತ್ರಮಾಡಿರಿ! ಮಹಾಸಮುದ್ರ ಪ್ರಾಣಿಗಳೇ,
ಆತನನ್ನು ಸ್ತುತಿಸಿರಿ!
8 ಆತನು ಬೆಂಕಿಯನ್ನೂ ಆಲಿಕಲ್ಲನ್ನೂ ಮಂಜನ್ನೂ
ಹೊಗೆಯನ್ನೂ ಬಿರುಗಾಳಿಯನ್ನೂ ಉಂಟು
ಮಾಡಿದನು.
9 ಆತನು ಬೆಟ್ಟಗಳನ್ನೂ ಗುಡ್ಡಗಳನ್ನೂ ಹಣ್ಣಿನ ಮರಗ
ಳನ್ನೂ ದೇವದಾರು ಮರಗಳನ್ನೂ ಸೃಷ್ಟಿಮಾಡಿದನು.
10 ಆತನು ಎಲ್ಲಾ ಕಾಡುಪ್ರಾಣಿಗಳನ್ನೂ ಪಶುಗಳನ್ನೂ
ಕ್ರಿಮಿಕೀಟಗಳನ್ನೂ ಪಕ್ಷಿಗಳನ್ನೂ ಸೃಷ್ಟಿಮಾಡಿದನು.
11 ಆತನು ಭೂಮಿಯ ಮೇಲೆ ರಾಜರುಗಳನ್ನೂ
ಜನಾಂಗಗಳನ್ನೂ ನಾಯಕರುಗಳನ್ನೂ ನ್ಯಾಯಾಧಿ
ಪತಿಗಳನ್ನೂ ಸೃಷ್ಟಿ ಮಾಡಿದನು.
12 ಆತನು ಪ್ರಾಯಸ್ಥರಾದ ಸ್ತ್ರೀ ಪುರುಷರನ್ನೂ
ವೃದ್ಧರನ್ನೂ ಯೌವನಸ್ಥರನ್ನೂ ಸೃಷ್ಟಿಸಿದನು.
13 ಯೆಹೋವನ ಹೆಸರನ್ನು ಕೊಂಡಾಡಿರಿ! ಆತನ
ಹೆಸರನ್ನು ಶಾಶ್ವತವಾಗಿ ಸನ್ಮಾನಿಸಿರಿ! ಭೂಮ್ಯಾಕಾಶ
ಗಳಲ್ಲಿರುವ ಸಮಸ್ತವೇ, ಆತನನ್ನು ಸ್ತುತಿಸು!
14 ಆತನು ತನ್ನ ಜನರನ್ನು ಬಲಿಷ್ಠರನ್ನಾಗಿ ಮಾಡುತ್ತಾನೆ.
ಆತನ ಭಕ್ತರನ್ನು ಜನರು ಹೊಗಳುವರು. ಜನರು
ಇಸ್ರೇಲರನ್ನು ಹೊಗಳುವರು. ಆತನು ಹೋರಾಡು
ತ್ತಿರುವುದು ಅವರಿಗಾಗಿಯೇ. ಯೆಹೋವನಿಗೆ
ಸ್ತೋತ್ರವಾಗಲಿ!

## ಕೀರ್ತನೆ 149

1 ಯೆಹೋವನಿಗೆ ಸ್ತೋತ್ರವಾಗಲಿ. ಯೆಹೋವನ
ಹೊಸ ಕಾರ್ಯಗಳಿಗಾಗಿ ಆತನಿಗೆ ಹೊಸ ಹಾಡನ್ನು
ಹಾಡಿರಿ! ಆತನ ಭಕ್ತರ ಸಭೆಯಲ್ಲಿ ಆತನನ್ನು
ಸಂಕೀರ್ತಿಸಿರಿ.
2 ಇಸ್ರೇಲರು ತಮ್ಮ ಸೃಷ್ಟಿಕರ್ತನಲ್ಲಿ ಉಲ್ಲಾಸಿಸಲಿ!
ಚೀಯೋನಿನ ಜನರು ತಮ್ಮ ರಾಜನಲ್ಲಿ ಹರ್ಷಿಸಲಿ.
3 ಅವರು ನೃತ್ಯಮಾಡುತ್ತಾ ರ್ಝಲ್ಲರಿಗಳನ್ನು ಬಡಿ
ಯುತ್ತಾ, ಹಾರ್ಪ್‌ವಾದ್ಯಗಳನ್ನು ನುಡಿಸುತ್ತಾ
ಆತನನ್ನು ಸ್ತುತಿಸಲಿ.
4 ಯೆಹೋವನು ತನ್ನ ಜನರಲ್ಲಿ ಸಂತೋಷಿಸುವನು.
ಆತನು ತನ್ನ ದೀನಜನರಿಗಾಗಿ ಅದ್ಭುತಕಾರ್ಯವನ್ನು
ಮಾಡಿ ಅವರನ್ನು ರಕ್ಷಿಸಿದನು!
5 ಆತನ ಭಕ್ತರೇ, ನಿಮ್ಮ ವಿಜಯದಲ್ಲಿ ಉಲ್ಲಾಸಿಸಿರಿ!
ಹಾಸಿಗೆಯ ಮೇಲಿರುವಾಗಲೂ ಸಂತೋಷದಿಂದಿರಿ.
6 ಜನರು ಆತನಿಗೆ ಗಟ್ಟಿಯಾಗಿ ಸ್ತೋತ್ರಮಾಡುತ್ತಾ
ತಮ್ಮ ಖಡ್ಗಗಳನ್ನು ಕೈಗಳಲ್ಲಿ ತೆಗೆದುಕೊಳ್ಳಲಿ.
7 ಅವರು ಹೋಗಿ ತಮ್ಮ ಶತ್ರುಗಳನ್ನು ದಂಡಿಸಲಿ; ಅನ್ಯ
ಜನರನ್ನು ದಂಡಿಸಲಿ.
8 ದೇವಜನರು ಆ ರಾಜರುಗಳನ್ನೂ ಪ್ರಮುಖರನ್ನೂ
ಸರಪಣಿಗಳಿಂದ ಬಂಧಿಸುವರು.
9 ಆತನ ಆಜ್ಞೆಗನುಸಾರವಾಗಿ ಆತನ ಭಕ್ತರು ತಮ್ಮ ಶತ್ರು
ಗಳನ್ನು ದಂಡಿಸುವರು. ಆತನು ತನ್ನ ಭಕ್ತರಿಗೆ
ಒಳ್ಳೆಯವನಾಗಿದ್ದಾನೆ. ಯೆಹೋವನಿಗೆ ಸ್ತೋತ್ರ
ವಾಗಲಿ.

## ಕೀರ್ತನೆ 150

1 ಯೆಹೋವನಿಗೆ ಸ್ತೋತ್ರವಾಗಲಿ! ದೇವರನ್ನು ಆತನ
ಆಲಯದಲ್ಲಿ ಸ್ತುತಿಸಿರಿ! ಆತನ ಶಕ್ತಿಯನ್ನು ಪರ
ಲೋಕದಲ್ಲಿ ಸ್ತುತಿಸಿರಿ!
2 ಆತನ ಮಹತ್ಕಾರ್ಯಗಳಿಗಾಗಿ ಆತನನ್ನು ಸ್ತುತಿಸಿರಿ!
ಆತನ ಮಹತ್ವಕ್ಕೆ ತಕ್ಕಂತೆ ಆತನನ್ನು ಸ್ತುತಿಸಿರಿ!
3 ತುತ್ತೂರಿಗಳನ್ನೂ ಕೊಂಬುಗಳನ್ನೂ ಊದುತ್ತಾ
ಆತನನ್ನು ಸ್ತುತಿಸಿರಿ! ಹಾರ್ಪ್‌ವಾದ್ಯಗಳನ್ನೂ ಲೈರ್
ವಾದ್ಯಗಳನ್ನೂ ನುಡಿಸುತ್ತಾ ಆತನನ್ನು ಸ್ತುತಿಸಿರಿ.
4 ರ್ಝಲ್ಲರಿಗಳನ್ನು ಬಡಿಯುತ್ತಾ ನೃತ್ಯಮಾಡುತ್ತಾ ಆತ
ನನ್ನು ಸ್ತುತಿಸಿರಿ. ತಂತಿವಾದ್ಯಗಳಿಂದಲೂ ಕೊಳಲುಗ
ಳಿಂದಲೂ ಆತನನ್ನು ಸ್ತುತಿಸಿರಿ.
5 ತಾಳಗಳಿಂದ ಆತನನ್ನು ಸ್ತುತಿಸಿರಿ! ರ್ಝಲ್ಲರಿಗಳಿಂದ
ಆತನನ್ನು ಸ್ತುತಿಸಿರಿ!
6 ಸಮಸ್ತಜೀವಿಗಳೇ ಯೆಹೋವನಿಗೆ ಸ್ತೋತ್ರಮಾಡಿರಿ!
ಯೆಹೋವನಿಗೆ ಸ್ತೋತ್ರವಾಗಲಿ!

# ಜ್ಞಾನೋಕ್ತಿಗಳು

## ಮುನ್ನುಡಿ

1 ದಾವೀದನ ಮಗನಾದ ಸೊಲೊಮೋನನ
ಜ್ಞಾನೋಕ್ತಿಗಳು. ಸೊಲೊಮೋನನು ಇಸ್ರೇಲರ
ರಾಜನಾಗಿದ್ದನು.
2ಜ್ಞಾನವನ್ನು ಮತ್ತು ಶಿಕ್ಷಣವನ್ನು ಪಡೆದುಕೊಳ್ಳು
ವುದಕ್ಕೂ ಬುದ್ಧಿವಾದವನ್ನು ಗ್ರಹಿಸಿಕೊಳ್ಳುವುದಕ್ಕೂ ಈ
ಜ್ಞಾನೋಕ್ತಿಗಳು ಸಹಾಯಕವಾಗಿವೆ. 3ಈ ಜ್ಞಾನೋಕ್ತಿ
ಗಳು ಯೋಗ್ಯ ಮಾರ್ಗದಲ್ಲಿ ಜೀವಿಸಲು ಅಂದರೆ
ಯಥಾರ್ಥವಾಗಿಯೂ ನ್ಯಾಯವಾಗಿಯೂ ಮತ್ತು
ಒಳ್ಳೆಯವರಾಗಿಯೂ ಇರಲು ಉಪದೇಶಿಸುತ್ತವೆ. 4ಈ
ಜ್ಞಾನೋಕ್ತಿಗಳು ಸಾಮಾನ್ಯರಿಗೆ ಜಾಣತನವನ್ನು
ಯೌವನಸ್ಥರಿಗೆ ಜ್ಞಾನವನ್ನೂ ತಿಳಿವಳಿಕೆಯನ್ನೂ
ಕೊಡುತ್ತವೆ. 5ಈ ಜ್ಞಾನೋಕ್ತಿಗಳಿಗೆ ಕಿವಿಗೊಡುವುದರ
ಮೂಲಕ ಜ್ಞಾನಿಗಳು ತಮ್ಮ ಪಾಂಡಿತ್ಯವನ್ನೂ ವಿವೇಕಿಗಳು
ತಮ್ಮ ಉಚಿತಾಲೋಚನೆಗಳನ್ನೂ ಹೆಚ್ಚಿಸಿಕೊಳ್ಳಲಿ. 6ಆಗ
ಅವರು ಗಾದೆಗಳನ್ನು, ಸಾಮತಿಗಳನ್ನು, ಜ್ಞಾನದ ನುಡಿ
ಗಳನ್ನು ಮತ್ತು ಒಗಟುಗಳನ್ನು ಅರ್ಥಮಾಡಿಕೊಳ್ಳುವರು.
7ಯೆಹೋವನಲ್ಲಿಟ್ಟಿರುವ ಭಯಭಕ್ತಿಯೇ ಜ್ಞಾನದ
ಮೂಲ. ಮೂರ್ಖರಾದರೊ ಜ್ಞಾನವನ್ನೂ ಶಿಸ್ತನ್ನೂ
ದ್ವೇಷಿಸುವರು.

## ಸೊಲೊಮೋನನು ತನ್ನ ಮಗನಿಗೆ ಮಾಡಿದ ಉಪದೇಶ

8ನನ್ನ ಮಗನೇ, ನಿನ್ನ ತಂದೆಯ ಬುದ್ಧಿಮಾತಿಗೆ ಕಿವಿ
ಗೊಡು; ನಿನ್ನ ತಾಯಿಯ ಉಪದೇಶವನ್ನು ಅಲಕ್ಷಿಸ
ಬೇಡ. 9ನಿನ್ನ ತಂದೆ ತಾಯಿಗಳ ಮಾತುಗಳು ನಿನ್ನ ತಲೆಗೆ
ಸುಂದರವಾದ ಹೂವಿನ ಕಿರೀಟದಂತೆಯೂ ನಿನ್ನ
ಕೊರಳಿಗೆ ಸುಂದರವಾದ ಹಾರದಂತೆಯೂ ಇವೆ.

## ದುಷ್ಟರಿಂದ ದೂರವಿರಲು ಉಪದೇಶ

10ನನ್ನ ಮಗನೇ, ಪಾಪವನ್ನು ಪ್ರೀತಿಸುವ ಜನರು
ನಿನ್ನನ್ನು ಪ್ರೇರೇಪಿಸುತ್ತಾರೆ. ನೀನು ಅವರನ್ನು ಹಿಂಬಾಲಿಸ
ಕೂಡದು. 11ಆ ಪಾಪಿಗಳು ನಿನಗೆ, ‘‘ನಮ್ಮ ಜೊತೆ ಬಾ!
ನಾವು ಅಲ್ಲಿ ಅವಿತುಕೊಂಡಿದ್ದು ಯಾರನ್ನಾದರೂ ಕೊಲೆ
ಮಾಡೋಣ; ಕೆಲವು ನಿರಪರಾಧಿಗಳ ಮೇಲೆ ನಿಷ್ಕಾರಣ
ವಾಗಿ ಆಕ್ರಮಣ ಮಾಡಿ 12ಅವರನ್ನು ಜೀವಂತವಾಗಿ
ನುಂಗೋಣ; ಸಮಾಧಿಗೆ ಹಾಕಲ್ಪಡುವವರಂತೆ
ಸಂಪೂರ್ಣವಾಗಿ ನುಂಗಿಬಿಡೋಣ. 13ಬೆಲೆಬಾಳುವ
ಎಲ್ಲ ಬಗೆಯ ವಸ್ತುಗಳನ್ನು ಕದ್ದು ನಮ್ಮ ಮನೆಗಳಲ್ಲಿ
ತುಂಬಿಸಿಕೊಳ್ಳೋಣ. 14ಅವುಗಳಲ್ಲಿ ನಿನಗೆ ಸಮ ಪಾಲು
ದೊರೆಯುವುದು, ಬಂದು ನಮ್ಮೊಂದಿಗೆ ಸೇರಿಕೋ’’
ಎಂದು ಅವರು ಹೇಳಬಹುದು.
15ನನ್ನ ಮಗನೇ, ಅವರನ್ನು ಹಿಂಬಾಲಿಸಬೇಡ. ಅವರ
ಮಾರ್ಗದಲ್ಲಿ ಮೊದಲನೆ ಹೆಜ್ಜೆಯನ್ನೂ ಇಡಬೇಡ.
16ಅವರು ಕೇಡುಮಾಡುವುದಕ್ಕೆ ಯಾವಾಗಲೂ ಸಿದ್ಧ
ರಾಗಿದ್ದಾರೆ. ಜನರನ್ನು ಕೊಲ್ಲುವುದಕ್ಕೆ ಯಾವಾಗಲೂ
ಆತುರಪಡುತ್ತಾರೆ.
17ಪಕ್ಷಿಗಳ ಕಣ್ಣೆದುರಿನಲ್ಲಿ ಬಲೆಹಾಕುವುದರಿಂದ
ಪ್ರಯೋಜನವೇನೂ ಇಲ್ಲ. 18ಅವರಾದರೊ ಬೇರೊಬ್ಬ
ನನ್ನು ಕೊಲ್ಲಲ್ಲು ಅವಿತುಕೊಂಡು ಕಾಯುತ್ತಾರೆ; ಆದರೆ
ಅವರು ತಮ್ಮ ಸಂಚಿನಿಂದ ತಮ್ಮನ್ನೇ ನಾಶಪಡಿಸಿಕೊಳ್ಳು
ತ್ತಾರೆ. 19ದುರಾಶೆಯುಳ್ಳವರು ತಾವು ದೋಚಿಕೊಳ್ಳುವ
ವಸ್ತುಗಳಿಂದಲೇ ನಾಶವಾಗುವರು.

## ಜ್ಞಾನವೆಂಬಾಕೆ

20ಜ್ಞಾನವು ಬೀದಿಗಳಲ್ಲಿ ಕೂಗುವ ಸ್ತ್ರೀಯಂತಿದೆ.
ಆಕೆಯು ಬಹಿರಂಗ ಸ್ಥಳಗಳಲ್ಲಿ ಕೂಗಿ ಕರೆಯುತ್ತಾಳೆ.
21ಆಕೆಯು ಜನ ಸಂದಣಿಯ ರಸ್ತೆಚೌಕಗಳಲ್ಲಿ ಕರೆ
ಯುತ್ತಾಳೆ. ಪಟ್ಟಣದ ಬಾಗಿಲುಗಳ ಬಳಿಯಲ್ಲಿ ಆಕೆಯು
ಜನರೊಂದಿಗೆ ಮಾತಾಡುತ್ತಾಳೆ:
22‘‘ನೀವು ಮೂಢಜನರು. ಇನ್ನೆಷ್ಟುಕಾಲ ನೀವು ನಿಮ್ಮ
ಮೂಢತನದಲ್ಲಿ ಆನಂದಿಸುವಿರಿ? ಇನ್ನೆಷ್ಟುಕಾಲ ನೀವು
ವಿವೇಕವನ್ನು ಹಾಸ್ಯಮಾಡಬೇಕೆಂದಿದ್ದೀರಿ? ಇನ್ನೆಷ್ಟು
ಕಾಲ ನೀವು ಜ್ಞಾನವನ್ನು ದ್ವೇಷ ಮಾಡಬೇಕೆಂದಿದ್ದೀರಿ?
23ನೀವು ನನ್ನ ಎಚ್ಚರಿಕೆಗೆ ಕಿವಿಗೊಟ್ಟರೆ, ನನ್ನ ಮನಸ್ಸಿ
ನಲ್ಲಿರುವುದನ್ನೆಲ್ಲ ತಿಳಿಸುವೆನು; ನನ್ನ ಆಲೋಚನೆಗಳನ್ನು
ನಿಮಗೆ ಗೊತ್ತುಪಡಿಸುವೆನು.
24‘‘ಆದರೆ ನೀವು ನನಗೆ ಗಮನಕೊಡಲಿಲ್ಲ. ನಾನು
ಸಹಾಯಮಾಡಲು ಪ್ರಯತ್ನಿಸಿದೆ. ನಾನು ಕೈಚಾಚಿದೆ;

ಆದರೆ ನೀವು ನನ್ನ ಸಹಾಯವನ್ನು ತೆಗೆದುಕೊಳ್ಳದೆ ತಿರಸ್ಕರಿ
ಸಿದಿರಿ. 25ನೀವು ನನಗೆ ಮುಖ ತಿರುವಿಕೊಂಡಿರಿ; ನನ್ನ
ಸಲಹೆಗಳನ್ನೆಲ್ಲ ಕಡೆಗಣಿಸಿದಿರಿ; ನನ್ನ ಎಚ್ಚರಿಕೆಯನ್ನು
ತಿರಸ್ಕರಿಸಿದಿರಿ. 26ಆದ್ದರಿಂದ ನಿಮ್ಮ ಕಷ್ಟದಲ್ಲಿ ನಾನು
ನಗುವೆನು; ಅಪಾಯವು ನಿಮಗೆ ಬಡಿಯುವಾಗ ನಿಮ್ಮನ್ನು
ಗೇಲಿಮಾಡುವೆನು. 27ಮಹಾಕಷ್ಟವು ಕೆಟ್ಟ ಬಿರುಗಾಳಿ
ಯಂತೆ ನಿಮಗೆ ಬರುವುದು. ತೊಂದರೆಗಳು ಬಲವಾದ
ಗಾಳಿಯಂತೆ ನಿಮಗೆ ಬಡಿಯುವುದು. ನಿಮ್ಮ ಕಷ್ಟಗಳು
ಮತ್ತು ದುಃಖಗಳು ನಿಮ್ಮ ಮೇಲೆ ಬಹು ಭಾರ
ವಾಗಿರುತ್ತವೆ.

28‘‘ಇವೆಲ್ಲಾ ನಿಮಗೆ ಸಂಭವಿಸುವಾಗ ನೀವು ಸಹಾಯ
ಕ್ಕಾಗಿ ನನ್ನನ್ನು ಕೇಳುವಿರಿ; ಆದರೆ ನಾನು ನಿಮಗೆ ಸಹಾಯ
ಮಾಡುವುದಿಲ್ಲ. ನೀವು ನನಗಾಗಿ ಹುಡುಕುವಿರಿ. ಆದರೆ
ನಾನು ನಿಮಗೆ ಸಿಕ್ಕುವುದಿಲ್ಲ. 29ನಾನು ನಿಮಗೆ ಸಹಾಯ
ಮಾಡುವುದಿಲ್ಲ; ಏಕೆಂದರೆ ನೀವೆಂದೂ ನನ್ನ ಜ್ಞಾನವನ್ನು
ಬಯಸಲಿಲ್ಲ. ನೀವು ಯೆಹೋವನಲ್ಲಿ ಭಯ ಭಕ್ತಿಯಿಂದಿ
ರಲು ನಿರ್ಧರಿಸಲಿಲ್ಲ. 30ನೀವು ನನ್ನ ಎಚ್ಚರಿಕೆಯ ಮಾತು
ಗಳನ್ನು ತಿರಸ್ಕರಿಸಿದಿರಿ. ನಾನು ನಿಮಗೆ ಸರಿಯಾದ ದಾರಿ
ಯನ್ನು ತೋರಿಸಿದಾಗ ನೀವು ನನಗೆ ಕಿವಿಗೊಡಲಿಲ್ಲ.
31ಆದ್ದರಿಂದ ನೀವು ನಿಮ್ಮ ದುಷ್ಟ ನಡತೆಯ ಫಲಗಳನ್ನು
ಅನುಭವಿಸುವಿರಿ. ನೀವು ಬೇರೆಯವರಿಗೆ ಮಾಡಿದ
ಕುಯುಕ್ತಿಗಳನ್ನೇ ಹೊಂದುವಿರಿ.

32‘‘ಮೂಢರು ಜ್ಞಾನವನ್ನು ತಿರಸ್ಕರಿಸುವುದರಿಂದ
ಸಾವಿ ಗೀಡಾಗುವರು; ಅವರ ಉದಾಸೀನತೆಯೇ ಅವ
ರನ್ನು ನಾಶಪಡಿಸುವುದು.

33ಆದರೆ ನನಗೆ ವಿಧೇಯನಾಗುವವನು ಕ್ಷೇಮ
ವಾಗಿಯೂ ಸುಖವಾಗಿಯೂ ಬದುಕುವನು. ಅವನು
ಅಪಾಯಕ್ಕೆ ಭಯಪಡುವ ಅವಶ್ಯವಿಲ್ಲ.’’

## ಜ್ಞಾನದ ಮೌಲ್ಯ

2 ನನ್ನ ಮಗನೇ, ನಾನು ಹೇಳುವ ಈ ಮಾತುಗಳನ್ನು
ಸ್ವೀಕಾರಮಾಡಿಕೊ. ನನ್ನ ಆಜ್ಞೆಗಳನ್ನು ನೆನಪು
ಮಾಡಿಕೊ. 2ಜ್ಞಾನಕ್ಕೆ ಕಿವಿಗೊಡು; ಅದನ್ನು ಅರ್ಥಮಾಡಿ
ಕೊಳ್ಳಲು ನಿನ್ನಿಂದಾದಷ್ಟು ಪ್ರಯತ್ನಿಸು. 3ಬುದ್ಧಿಗಾಗಿ
ಮೊರೆಯಿಡು! ವಿವೇಕಕ್ಕಾಗಿ ಕೂಗಿಕೋ! 4ಬೆಳ್ಳಿಯನ್ನು
ಹುಡುಕುವಂತೆ ವಿವೇಕವನ್ನು ಹುಡುಕು. ಅಡಗಿರುವ
ಭಂಡಾರದಂತೆ ಅದನ್ನು ಹುಡುಕು. 5ಆಗ ನೀನು
ಯೆಹೋವನಲ್ಲಿ ಭಯಭಕ್ತಿಯಿಂದಿರಲು ಕಲಿತು
ಕೊಳ್ಳುವೆ; ದೈವಜ್ಞಾನವನ್ನು ಹೊಂದಿಕೊಳ್ಳುವೆ.

6ಜ್ಞಾನವನ್ನು ಕೊಡುವಾತನು ಯೆಹೋವನೇ. ಜ್ಞಾನ
ಮತ್ತು ತಿಳುವಳಿಕೆ ಆತನ ಬಾಯಿಂದ ಬರುತ್ತವೆ. 7ಆತನು
ನೀತಿವಂತರಿಗಾಗಿ ಸುಜ್ಞಾನವನ್ನು ಕೂಡಿಸಿಡುವನು;
ನಿರ್ದೋಷಿಗಳಿಗೆ ಗುರಾಣಿಯಂತಿರುವನು. 8ಆತನು
ನ್ಯಾಯವಂತರನ್ನು ಕಾಪಾಡುತ್ತಾನೆ; ತನ್ನ ಪವಿತ್ರಜನರಿಗೆ
ಕಾವಲಾಗಿರುತ್ತಾನೆ.

9ಆಗ ನೀನು ಒಳ್ಳೆಯದನ್ನೂ ನ್ಯಾಯನೀತಿಗಳನ್ನೂ
ಸನ್ಮಾರ್ಗಗಳನ್ನೂ ಅರ್ಥಮಾಡಿಕೊಳ್ಳುವೆ. 10ಆಗ
ಜ್ಞಾನವು ನಿನ್ನ ಹೃದಯದ ಒಳಗೆ ಬರುವುದು; ನಿನ್ನ ಆತ್ಮವು
ವಿವೇಕದೊಡನೆ ಸಂತೋಷವಾಗಿರುವುದು.

11ವಿವೇಕವು ನಿನ್ನನ್ನು ಕಾಪಾಡುವುದು; ಬುದ್ಧಿಯು
ನಿನಗೆ ಕಾವಲಾಗಿರುವುದು; 12ಹೀಗೆ ನೀನು ದುರ್ಮಾರ್ಗ
ಗಳಿಂದಲೂ ಸುಳ್ಳುಗಾರರಿಂದಲೂ ತಪ್ಪಿಸಿಕೊಳ್ಳುವೆ.
13ಅವರಾದರೊ ನೀತಿ ಮಾರ್ಗವನ್ನು ಬಿಟ್ಟು ಪಾಪವೆಂಬ
ಕತ್ತಲೆಯಲ್ಲಿ ಜೀವಿಸುತ್ತಿದ್ದಾರೆ. 14ಅವರಿಗೆ ಕೆಟ್ಟದ್ದನ್ನು
ಮಾಡುವುದರಲ್ಲೇ ಸಂತೋಷ; ಕೆಡುಕರ ಕೆಟ್ಟ ಕಾರ್ಯ
ಗಳಲ್ಲೇ ಆನಂದ. 15ಅವರ ಮಾರ್ಗಗಳು ವಕ್ರವಾಗಿವೆ;
ಅವರ ನಡತೆಗಳು ದುರ್ನಡತೆಗಳಾಗಿವೆ.

16-17ವ್ಯಭಿಚಾರಿಣಿಯು ನಿನ್ನೊಡನೆ ಸವಿಮಾತುಗಳ
ನ್ನಾಡಿ ತನ್ನೊಡನೆ ಪಾಪ ಮಾಡುವಂತೆ ನಿನ್ನನ್ನು ಒತ್ತಾಯಿಸ
ಬಹುದು. ಯೌವನಪ್ರಾಯದಲ್ಲಿ ಮದುವೆಮಾಡಿ
ಕೊಂಡ ಅವಳು ತನ್ನ ಗಂಡನನ್ನು ಬಿಟ್ಟುಬಿಟ್ಟಿದ್ದಾಳೆ;
ಮದುವೆಯಲ್ಲಿ ದೇವರ ಮುಂದೆ ಮಾಡಿದ ವಾಗ್ದಾನ
ಗಳನ್ನು ಮೀರಿದ್ದಾಳೆ. 18ನೀನು ಅವಳ ಮನೆಯೊಳಗೆ
ಹೋದರೆ, ನಾಶನದ ಕಡೆಗೆ ಮೊದಲನೆ ಹೆಜ್ಜೆ ಹಾಕುತ್ತಿ
ರುವೆ. ನೀನು ಅವಳನ್ನು ಹಿಂಬಾಲಿಸಿದರೆ, ಅವಳು ನಿನ್ನನ್ನು
ಸಮಾಧಿಗೆ ನಡೆಸುವಳು. 19ಅವಳು ಸಮಾಧಿಯಂತೆ
ಇದ್ದಾಳೆ. ಅವಳ ಬಳಿಗೆ ಹೋಗುವವನು ಎಂದಿಗೂ ಹಿಂತಿ
ರುಗಿ ಬರುವುದಿಲ್ಲ; ಅವನ ಜೀವನವು ಮೊದಲಿ
ನಂತಿರುವುದಿಲ್ಲ.

20ಆದ್ದರಿಂದ ನೀನು ಒಳ್ಳೆಯವರ ಮಾದರಿಯನ್ನು
ಅನುಸರಿಸಬೇಕು. ನೀತಿವಂತರ ಮಾರ್ಗದಲ್ಲಿ ಜೀವಿಸ
ಬೇಕು. 21ನೀತಿವಂತರು ಸ್ವದೇಶದಲ್ಲಿ ವಾಸಿಸುವರು.
ನಿರ್ದೋಷಿಗಳು ಸ್ವದೇಶದಲ್ಲಿ ನೆಲೆಸುವರು. 22ದುಷ್ಟರಾ
ದರೊ ಸ್ವದೇಶದಿಂದ ತೆಗೆದುಹಾಕಲ್ಪಡುವರು; ದ್ರೋಹಿ
ಗಳು ನಿರ್ಮೂಲವಾಗುವರು.

## ದೀರ್ಘಾಯುಷ್ಯವನ್ನು ಪಡೆದುಕೊಳ್ಳಿ

3 ನನ್ನ ಮಗನೇ, ನನ್ನ ಉಪದೇಶವನ್ನು ಮರೆಯಬೇಡ.
ನನ್ನ ಆಜ್ಞೆಗಳನ್ನು ಜ್ಞಾಪಕದಲ್ಲಿಟ್ಟುಕೋ. 2ಅವು
ನಿನಗೆ ದೀರ್ಘಾಯುಷ್ಯವನ್ನು ನೀಡಿ ಸಂತೋಷ ಸಮಾ
ಧಾನಗಳಿಂದ ಕೂಡಿದ ಜೀವಿತವನ್ನು ಕೊಡುತ್ತವೆ.

3ಪ್ರೀತಿಯೂ ನಂಬಿಗಸ್ತಿಕೆಯೂ ನಿನ್ನನ್ನು ಬಿಟ್ಟು
ಹೋಗದಿರಲಿ. ಅವುಗಳನ್ನು ನಿನ್ನ ಕೊರಳಿಗೆ ಕಟ್ಟಿಕೋ;
ನಿನ್ನ ಹೃದಯದ ಮೇಲೆ ಬರೆದುಕೊ. 4ಆಗ ನೀನು
ದೇವರಿಂದಲೂ ಮನುಷ್ಯರಿಂದಲೂ ಮೆಚ್ಚಿಕೆಯನ್ನು
ಮತ್ತು ಒಳ್ಳೆಯ ಹೆಸರನ್ನು ಗಳಿಸಿಕೊಳ್ಳುವೆ.

### ಯೆಹೋವನಲ್ಲಿ ಭರವಸೆ ಇಡು

5ಯೆಹೋವನಲ್ಲಿ ಸಂಪೂರ್ಣವಾಗಿ ಭರವಸೆ ಇಡು.
ನಿನ್ನ ಸ್ವಂತ ಜ್ಞಾನವನ್ನು ಅವಲಂಬಿಸಬೇಡ. 6ನಿನ್ನ ಎಲ್ಲಾ
ಕಾರ್ಯಗಳಲ್ಲಿ ಆತನನ್ನು ಜ್ಞಾಪಿಸಿಕೋ. ಆಗ ಆತನು
ನಿನಗೆ ಸಹಾಯಮಾಡುವನು. 7ನಿನ್ನನ್ನು ಜ್ಞಾನಿಯೆಂದು
ಪರಿಗಣಿಸಿಕೊಳ್ಳದೆ ಯೆಹೋವನಿಗೆ ಭಯಪಟ್ಟು ಕೆಟ್ಟದ್ದ
ರಿಂದ ದೂರವಾಗಿರು. 8ನೀನು ಹೀಗೆ ಮಾಡುವುದಾದರೆ,
ಅದು ನಿನ್ನ ದೇಹಕ್ಕೆ ಒಳ್ಳೆಯ ಆರೋಗ್ಯವನ್ನೂ ನಿನ್ನ
ಎಲುಬುಗಳಿಗೆ ಹೊಸ ಶಕ್ತಿಯನ್ನೂ ಕೊಡುವುದು.

9ಐಶ್ವರ್ಯದಿಂದಲೂ ಬೆಳೆಯ ಪ್ರಥಮ ಫಲ
ದಿಂದಲೂ ಯೆಹೋವನನ್ನು ಸನ್ಮಾನಿಸು. 10ಆಗ ನಿನ್ನ
ಕಣಜಗಳು ದವಸ ಧಾನ್ಯಗಳಿಂದ ತುಂಬಿರುತ್ತವೆ. ನಿನ್ನ
ದ್ರಾಕ್ಷಾರಸದ ತೊಟ್ಟಿಗಳು ತುಂಬಿತುಳುಕುತ್ತವೆ.

11''ನನ್ನ ಮಗನೇ, ಯೆಹೋವನು ನಿನ್ನನ್ನು ಶಿಕ್ಷಿಸುವಾಗ
ಕೋಪಗೊಳ್ಳಬೇಡ. ಆತನು ಗದರಿಸುವಾಗ ಬೇಸರಪಡ
ಬೇಡ. 12ತಂದೆಯು ತನ್ನ ಮಗನನ್ನು ಗದರಿಸುವಂತೆಯೇ
ಯೆಹೋವನು ತಾನು ಪ್ರೀತಿಸುವವರನ್ನು ಶಿಕ್ಷಿಸುತ್ತಾನೆ.

### ಜ್ಞಾನದ ಆಶೀರ್ವಾದಗಳು

13ಜ್ಞಾನವನ್ನು ಕಂಡುಕೊಂಡು ವಿವೇಕವನ್ನು ಸಂಪಾ
ದಿಸಿ ಕೊಳ್ಳುವವನೇ ಭಾಗ್ಯವಂತನು. 14ಜ್ಞಾನವು ಬೆಳ್ಳಿ
ಗಿಂತಲೂ ಲಾಭದಾಯಕ. ಅದರ ಆದಾಯವು ಬಂಗಾರ
ಕ್ಕಿಂತಲೂ ಅಧಿಕ. 15ಜ್ಞಾನವು ರತ್ನಕ್ಕಿಂತಲೂ ಅಮೂಲ್ಯ
ವಾದದ್ದು. ನಿನ್ನ ಇಷ್ಟವಸ್ತುಗಳಲ್ಲಿ ಯಾವುದೂ ಅದಕ್ಕೆ
ಸಮವಿಲ್ಲ.

16ಜ್ಞಾನವು ನಿನಗೆ ದೀರ್ಘಾಯುಷ್ಯವನ್ನೂ ಐಶ್ವರ್ಯ
ವನ್ನೂ ಘನತೆಯನ್ನೂ ಕೊಡುತ್ತದೆ. 17ಜ್ಞಾನವು ನಿನ್ನ
ಜೀವನವನ್ನು ಸುಖಕರವನ್ನಾಗಿ ಮಾಡುತ್ತದೆ; ಸಮಾಧಾನ
ವನ್ನು ಬರ ಮಾಡುತ್ತದೆ. 18ಜ್ಞಾನವು ತನ್ನನ್ನು ಅವಲಂಭಿಸಿ
ಕೊಳ್ಳುವವರಿಗೆ ಜೀವದಾಯಕ ಮರದಂತಿದೆ. ಜ್ಞಾನ
ವನ್ನು ಹೊಂದಿರುವವರು ಧನ್ಯರಾಗಿದ್ದಾರೆ.

19ಯೆಹೋವನು ಜ್ಞಾನದ ಮೂಲಕ ಭೂಮಿಯನ್ನು
ಸೃಷ್ಟಿಸಿದನು. ಯೆಹೋವನು ವಿವೇಕದ ಮೂಲಕ ಆಕಾಶ
ವನ್ನು ಸೃಷ್ಟಿಸಿದನು. 20ಯೆಹೋವನು ತನ್ನ ಜ್ಞಾನದಿಂದ
ಸಮುದ್ರಗಳನ್ನು ವಿಭಜಿಸಿದನು. ಮೋಡವು ಮಳೆಸುರಿ
ಸುವುದಕ್ಕೆ ಆತನ ಜ್ಞಾನವೇ ಕಾರಣ.

### ಯೋಗ್ಯನಡತೆಗೆ ಜ್ಞಾನದ ಅಗತ್ಯ

21ನನ್ನ ಮಗನೇ, ಜ್ಞಾನವನ್ನೂ ಬುದ್ಧಿಯನ್ನೂ ಭದ್ರ
ವಾಗಿಟ್ಟುಕೋ. ನಿನ್ನ ದೃಷ್ಟಿಯು ಅವುಗಳ ಮೇಲೇ ಇರಲಿ.
22ಜ್ಞಾನ ವಿವೇಕಗಳು ನಿನಗೆ ಜೀವವನ್ನೂ ನಿನ್ನ ಜೀವಿತಕ್ಕೆ
ಸೌಂದರ್ಯವನ್ನೂ ನೀಡುತ್ತವೆ. 23ಆಗ ನೀನು ಎಡವಿ
ಬೀಳದೆ ಸುರಕ್ಷಿತವಾಗಿ ನಡೆಯುವೆ. 24ಆಗ ನೀನು
ನಿರ್ಭಯದಿಂದ ಮಲಗಿಕೊಂಡು ಸುಖವಾಗಿ ನಿದ್ರಿಸುವೆ.
25ದುಷ್ಟರ ಮೇಲೆ ಇದ್ದಕ್ಕಿದ್ದಂತೆ ಬರುವ ಅಪಾಯ
ಕ್ಕಾಗಲೀ ನಾಶನಕ್ಕಾಗಲೀ ಹೆದರಿಕೊಳ್ಳಬೇಡ.
26ಯೆಹೋವನು ನಿನ್ನೊಂದಿಗಿದ್ದಾನೆ. ನೀನು ಬಲೆಗೆ ಸಿಕ್ಕಿ
ಬೀಳದಂತೆ ಆತನು ನಿನ್ನನ್ನು ಕಾಪಾಡುತ್ತಾನೆ.

27ನಿನಗೆ ಸಾಧ್ಯವಾದಾಗಲೆಲ್ಲಾ ಉಪಕಾರಮಾಡು.

28ನಿನ್ನ ನೆರೆಯವನಿಗೆ ಕೊಡತಕ್ಕದ್ದು ನಿನ್ನಲ್ಲಿರುವಾಗ,
''ನಾಳೆ ಬಾ, ಕೊಡುತ್ತೇನೆ'' ಎಂದು ಹೇಳಬೇಡ.

29ನಿನ್ನ ನೆರೆಯವನಿಗೆ ಕೇಡನ್ನು ಕಲ್ಪಿಸಬೇಡ. ನಿಮ್ಮ
ಸುರಕ್ಷತೆಗಾಗಿಯೇ ನೀವು ಸಮೀಪದಲ್ಲಿ ವಾಸಿಸುತ್ತಿ
ದ್ದೀರಲ್ಲಾ!

30ನಿನಗೆ ಕೇಡನ್ನು ಮಾಡಿಲ್ಲದಿರುವವನನ್ನು ನಿಷ್ಕಾರಣ
ವಾಗಿ ನ್ಯಾಯಾಲಯಕ್ಕೆ ಕೊಂಡೊಯ್ಯಬೇಡ.

31ಬಲಾತ್ಕಾರಿಯನ್ನು ಕಂಡು ಹೊಟ್ಟೇಕಿಚ್ಚು ಪಡ
ಬೇಡ; ಅವನ ನಡತೆಯನ್ನು ಅನುಸರಿಸಬೇಡ.
32ಯೆಹೋವನಿಗೆ ಮೋಸಗಾರರು ಅಸಹ್ಯ. ಆದರೆ ಆತನು
ಯಥಾರ್ಥರೊಂದಿಗೆ ಸ್ನೇಹದಿಂದಿರುವನು. 33ದುಷ್ಟರ
ಮನೆಯ ಮೇಲೆ ಯೆಹೋವನ ಶಾಪವಿರುವುದು; ಆದರೆ
ನೀತಿವಂತರ ಮನೆಯ ಮೇಲೆ ಆತನ ಆಶೀರ್ವಾದ
ವಿರುವುದು.

34ಗರ್ವಿಷ್ಠನಾಗಿದ್ದು ಬೇರೆಯವರನ್ನು ಗೇಲಿ ಮಾಡುವ
ವನನ್ನು ಯೆಹೋವನೂ ಗೇಲಿಮಾಡುವನು. ದೀನರಿ
ಗಾದರೋ ಆತನ ಕರುಣೆ ದೊರೆಯುವುದು.

35ಜ್ಞಾನಿಗಳು ಸನ್ಮಾನ ಹೊಂದುವರು. ಮೂಢರಿಗೆ
ಅವಮಾನವಾಗುವುದು.

### ಜ್ಞಾನ ವಿವೇಕಗಳ ಪ್ರಾಮುಖ್ಯತೆ

4 ಗಂಡುಮಕ್ಕಳೇ, ನಿಮ್ಮ ತಂದೆಯ ಉಪದೇಶಗಳಿಗೆ
ಕಿವಿಗೊಡಿ, ಗಮನವಿಟ್ಟು ಅರ್ಥಮಾಡಿಕೊಳ್ಳಿರಿ.
2ನನ್ನ ಉಪದೇಶಗಳು ಸದುಪದೇಶಗಳಾಗಿರುವುದರಿಂದ
ಅವು ಗಳನ್ನು ಎಂದಿಗೂ ಮರೆಯಬೇಡಿ.

3ನಾನು ನನ್ನ ತಂದೆಗೆ ಚಿಕ್ಕ ಮಗನಾಗಿದ್ದೆ. ನನ್ನ ತಾಯಿಗೆ
ನಾನೊಬ್ಬನೇ ಮಗನು. 4ನನ್ನ ತಂದೆ ನನಗೆ ಉಪದೇಶ
ಮಾಡಿದ್ದೇನೆಂದರೆ: ''ನನ್ನ ಮಾತುಗಳನ್ನು ನೆನಪು
ಮಾಡಿಕೊ; ನನ್ನ ಆಜ್ಞೆಗಳಿಗೆ ವಿಧೇಯನಾಗು, ಆಗ ನೀನು
ಬದುಕುವೆ. 5ಜ್ಞಾನವನ್ನು ಮತ್ತು ತಿಳುವಳಿಕೆಯನ್ನು
ಪಡೆದುಕೋ! ನನ್ನ ಮಾತುಗಳನ್ನು ಮರೆಯಬೇಡ.
ಯಾವಾಗಲೂ ನನ್ನ ಉಪದೇಶಗಳನ್ನು ಅನುಸರಿಸು.
6ಜ್ಞಾನವನ್ನು ಬಿಟ್ಟು ಬೇರೆ ಕಡೆಗೆ ತಿರುಗಿಕೊಳ್ಳಬೇಡ. ಆಗ
ಜ್ಞಾನವು ನಿನ್ನನ್ನು ಕಾಪಾಡುವುದು. ಜ್ಞಾನವನ್ನು ಪ್ರೀತಿಸು,
ಆಗ ಜ್ಞಾನವು ನಿನ್ನನ್ನು ಕಾಪಾ ಡುವುದು.''

7ಜ್ಞಾನವನ್ನು ಪಡೆಯಲು ನೀನು ನಿರ್ಧರಿಸಿದಾಗಲೇ
ಜ್ಞಾನವು ನಿನ್ನಲ್ಲಿ ಆರಂಭವಾಗುತ್ತದೆ. ಆದ್ದರಿಂದ

ಜ್ಞಾನವನ್ನು ಪಡೆಯಲು ನಿನ್ನಲ್ಲಿರುವುದನ್ನೆಲ್ಲಾ ಉಪ
ಯೋಗಿಸು. ಆಗ ನೀನು ವಿವೇಕಿಯಾಗುವೆ. 8ಜ್ಞಾನವನ್ನು
ಪ್ರೀತಿಸು, ಆಗ ಜ್ಞಾನವು ನಿನ್ನನ್ನು ಉನ್ನತ ಸ್ಥಾನಕ್ಕೆ ತರು
ವುದು. ಜ್ಞಾನವನ್ನು ಅಪ್ಪಿಕೊ; ಆಗ ಜ್ಞಾನವು ನಿನಗೆ ಸನ್ಮಾನ
ವನ್ನು ತರುವುದು. 9ಅದು ನಿನಗೆ ಅಂದವಾದ ಪುಷ್ಪಮಾಲೆ
ಯಂತೆಯೂ ಸುಂದರವಾದ ಕಿರೀಟದಂತೆಯೂ
ಇರುವುದು.

10ಮಗನೇ, ನನ್ನ ಮಾತನ್ನು ಕೇಳು. ನಾನು ಹೇಳಿದಂತೆ
ಮಾಡು, ಆಗ ನೀನು ಬಹುಕಾಲ ಬದುಕುವೆ. 11ನಾನು
ನಿನಗೆ ಜ್ಞಾನದ ಕುರಿತು ಉಪದೇಶಿಸುತ್ತಿರುವೆನು. ನಾನು
ನಿನ್ನನ್ನು ನೇರವಾದ ದಾರಿಯಲ್ಲಿ ನಡೆಸುತ್ತಿರುವೆನು. 12ಈ
ದಾರಿಯಲ್ಲೇ ಹೋಗು, ಆಗ ನಿನ್ನ ಕಾಲುಗಳು ಇಕ್ಕಟ್ಟಿಗೆ
ಸಿಕ್ಕಿಕೊಳ್ಳುವುದಿಲ್ಲ. ನೀನು ಓಡಿದರೂ ಮುಗ್ಗರಿಸುವು
ದಿಲ್ಲ. 13ಈ ಉಪದೇಶಗಳನ್ನು ಯಾವಾಗಲೂ ನೆನಪು
ಮಾಡಿಕೊ; ಮರೆತುಬಿಡಬೇಡ. ಅವು ನಿನಗೆ ಜೀವ
ವಾಗಿವೆ!

14ಕೆಡುಕರ ಮಾರ್ಗದಲ್ಲಿ ನಡೆಯಬೇಡ. ಅವರಂತೆ
ಜೀವಿಸಬೇಡ. 15ದುಷ್ಟತನಕ್ಕೆ ದೂರವಾಗಿರು.ಅದರ
ಬಳಿಗೆ ಹೋಗಬೇಡ. ನೇರವಾಗಿ ನಡೆದು ಅದರಿಂದ
ದೂರವಾಗು. 16ಏನಾದರೂ ಕೇಡುಮಾಡದಿದ್ದರೆ ಕೆಡುಕ
ರಿಗೆ ನಿದ್ರೆಬಾರದು. ಯಾರಿಗಾದರೂ ನೋವು ಮಾಡದೆ
ಅವರು ನಿದ್ರಿಸಲಾರರು. 17ಅವರು ಬೇರೆಯವರಿಗೆ
ಕೇಡನ್ನಾಗಲೀ ನೋವನ್ನಾಗಲೀ ಮಾಡದೆ ಜೀವಿಸ
ಲಾರರು. ಅದೇ ಅವರ ಆಹಾರ ಮತ್ತು ಪಾನೀಯ.

18ನೀತಿವಂತರ ಜೀವಿತವು ಮಧ್ಯಾಹ್ನದವರೆಗೂ
ಹೆಚ್ಚುತ್ತಾ ಬರುವ ಮುಂಜಾನೆಯ ಬೆಳಕಿನಂತಿರುವುದು.
19ಆದರೆ ದುಷ್ಟರ ಜೀವಿತವು ರಾತ್ರಿಯ ಕತ್ತಲೆಯಂತಿದೆ.
ಅವರು ಕತ್ತಲೆ ಯಲ್ಲಿ ತಪ್ಪಿಸಿಕೊಂಡಿದ್ದು ತಮಗೆ ಕಾಣದ
ವಸ್ತುಗಳ ಮೇಲೆ ಎಡವಿ ಬೀಳುತ್ತಾರೆ.

20ನನ್ನ ಮಗನೇ, ನನ್ನ ಮಾತುಗಳಿಗೆ ಗಮನಕೊಡು.
ನನ್ನ ನುಡಿಗಳಿಗೆ ಕಿವಿಗೊಡು. 21ನಿನ್ನ ದೃಷ್ಟಿಯು ಅವುಗಳ
ಮೇಲಿರಲಿ, ಅವುಗಳನ್ನು ನಿನ್ನ ನೆನಪಿನಲ್ಲಿಟ್ಟುಕೋ.
22ನನ್ನ ಉಪದೇಶಕ್ಕೆ ಕಿವಿಗೊಡುವವರು ಜೀವವನ್ನು
ಹೊಂದಿಕೊಳ್ಳುವರು. ನನ್ನ ಮಾತುಗಳು ದೇಹಕ್ಕೆ ಒಳ್ಳೆಯ
ಆರೋಗ್ಯವನ್ನು ನೀಡುತ್ತವೆ.

23ನಿನ್ನ ಆಲೋಚನೆಗಳ ವಿಷಯದಲ್ಲಿ ಎಚ್ಚರಿಕೆ
ಯಿಂದಿರು. ನಿನ್ನ ನಡತೆಯು ನಿನ್ನ ಆಲೋಚನೆಗಳ ಮೇಲೆ
ಆಧಾರ ಗೊಂಡಿದೆ. 24ಸತ್ಯವನ್ನು ಸೊಟ್ಟಗೆ ಮಾಡದಿರು;
ಸುಳ್ಳನ್ನೂ ಹೇಳದಿರು.

25ಒಳ್ಳೆಯದನ್ನೇ ದೃಷ್ಟಿಸು; ನಿನ್ನ ನೋಟವನ್ನು ನಿನ್ನ
ಗುರಿಯ ಮೇಲೆ ಕೇಂದ್ರೀಕರಿಸು. 26ನಿನ್ನ ಕಾರ್ಯಗಳನ್ನು
ಎಚ್ಚರಿಕೆಯಿಂದ ಮಾಡು; ಆಗ ನಿನ್ನ ಜೀವನವು
ದೃಢವಾಗಿರುವುದು. 27ಒಳ್ಳೆಯ ಮಾರ್ಗವನ್ನು ಬಿಟ್ಟು
ಹೋಗಬೇಡ; ಆದರೆ ಕೆಡುಕಿಗೆ ಯಾವಾಗಲೂ ದೂರ
ವಾಗಿರು.

### ವ್ಯಭಿಚಾರಕ್ಕೆ ದೂರವಾಗಿರು

5 ನನ್ನ ಮಗನೇ, ನನ್ನ ಜ್ಞಾನೋಪದೇಶವನ್ನು ಕೇಳು.
ನನ್ನ ವಿವೇಕದ ಮಾತುಗಳಿಗೆ ಗಮನಕೊಡು. 2ಆಗ
ನೀನು ಯೋಗ್ಯವಾಗಿ ನಡೆದುಕೊಳ್ಳುವೆ; ತಿಳುವಳಿಕೆ
ಯಿಂದ ಮಾತಾಡುವೆ. 3ಮತ್ತೊಬ್ಬನ ಹೆಂಡತಿಯ ಮಾತು
ಗಳು ಜೇನಿನಂತೆ ಸಿಹಿಯಾಗಿವೆ; ಎಣ್ಣೆಗಿಂತ ನಯವಾಗಿವೆ.
4ಆದರೆ ಕೊನೆಗೆ ಆಕೆಯು ವಿಷದಂತೆ ಕಹಿಯಾಗುವಳು;
ಖಡ್ಗದಂತೆ ತೀಕ್ಷ್ಣವಾಗುವಳು. 5ಆಕೆಯ ಪಾದಗಳು
ಮರಣದ ಕಡೆಗೆ ಹೋಗುತ್ತವೆ. ಆಕೆ ನಿನ್ನನ್ನು ನೇರವಾಗಿ
ಪಾತಾಳಕ್ಕೆ ನಡೆಸುತ್ತಾಳೆ! 6ಆಕೆಯನ್ನು ಹಿಂಬಾಲಿಸಬೇಡ!
ಆಕೆ ನೀತಿಮಾರ್ಗವನ್ನು ಬಿಟ್ಟು ಹೋಗಿದ್ದಾಳೆ; ಅದು
ಆಕೆಗೆ ಗೊತ್ತೇ ಇಲ್ಲ. ಎಚ್ಚರಿಕೆಯಿಂದಿರು! ಜೀವ
ಮಾರ್ಗವನ್ನು ಹಿಂಬಾಲಿಸು!

7ಇಂತಿರಲು, ನನ್ನ ಗಂಡುಮಕ್ಕಳೇ, ನನಗೆ ಕಿವಿಗೊಡಿ.
ನನ್ನ ಮಾತುಗಳನ್ನು ಮರೆಯಬೇಡಿ. 8ವ್ಯಭಿಚಾರಿಣಿ
ಯಿಂದ ದೂರವಾಗಿರಿ. ಅವಳ ಮನೆಯ ಬಾಗಿಲ
ಸಮೀಪಕ್ಕೂ ಹೋಗಬೇಡಿ. 9ಒಂದು ವೇಳೆ ನೀವು
ಹೋದರೆ, ನಿಮ್ಮ ಮೇಲೆ ಜನರಿಗಿರುವ ಗೌರವವನ್ನು
ಕಳೆದುಕೊಳ್ಳುವಿರಿ; ಕ್ರೂರಿಗಳಿಂದ ಯೌವನದಲ್ಲಿಯೇ
ಸಾವಿಗೀಡಾಗುವಿರಿ. 10ನಿಮಗೆ ಗೊತ್ತಿಲ್ಲದವರು ನಿಮ್ಮ
ಐಶ್ವರ್ಯವನ್ನೆಲ್ಲಾ ತೆಗೆದುಕೊಳ್ಳುವರು; ನೀವು ದುಡಿದು
ಸಂಪಾದಿಸಿದ್ದನ್ನು ಬೇರೆಯವರು ಪಡೆದುಕೊಳ್ಳುವರು.

11ಕೊನೆಯಲ್ಲಿ, ನಿಮ್ಮ ಆರೋಗ್ಯ ಕೆಟ್ಟುಹೋಗುವುದ
ರಿಂದ ಮತ್ತು ನಿಮ್ಮಲ್ಲಿರುವುದನ್ನೆಲ್ಲಾ ಕಳೆದುಕೊಂಡು
ನೀವು ಗೋಳಾಡುವಿರಿ. 12-13ಆಗ ನೀವು, ‘‘ನಾನೇಕೆ ನನ್ನ
ತಂದೆ ತಾಯಿಗಳ ಮಾತನ್ನು ಕೇಳಲಿಲ್ಲ? ನಾನೇಕೆ ನನ್ನ
ಉಪದೇಶಕರ ಮಾತಿಗೆ ಕಿವಿಗೊಡಲಿಲ್ಲ? ನಾನು ಅವರ
ಬೋಧನೆಯನ್ನು ದ್ವೇಷಿಸಿದೆ; ಅವರ ಬುದ್ಧಿಮಾತನ್ನು
ತಿರಸ್ಕರಿಸಿದೆ.

14ಈಗಲಾದರೊ ನಾನು ಜನರೆಲ್ಲರ ಎದುರಿನಲ್ಲಿ
ಹಾಳಾಗಿ ಹೋಗಿ ದ್ದೇನೆ.’’

15ನಿನ್ನ ಸ್ವಂತ ಹೆಂಡತಿಗೆ ನಂಬಿಗಸ್ತನಾಗಿರು; ನಿನ್ನ
ಪ್ರೀತಿಯು ಆಕೆಗೆ ಮಾತ್ರಸಲ್ಲಲಿ. 16ಬೇರೆ ಸ್ತ್ರೀಯರಲ್ಲಿ
ನೀನು ಮಕ್ಕಳನ್ನು ಪಡೆಯುವುದು ಒಳ್ಳೆಯದಲ್ಲ. 17ನಿನ್ನ
ಮಕ್ಕಳು ನಿನ್ನವರೇ ಆಗಿರಲಿ; ಪರರು ನಿನ್ನೊಂದಿಗೆ ಪಾಲು
ಗಾರರಾಗದಿರಲಿ. 18ಆದ್ದರಿಂದ ಯೌವನಪ್ರಾಯದಲ್ಲಿ
ನೀನು ಮದುವೆಮಾಡಿಕೊಂಡ ಸ್ತ್ರೀಯೊಡನೆ ಸಂತೋ
ಷಿಸು. 19ಆಕೆ ಸುಂದರವಾದ ಜಿಂಕೆಯಂತೆಯೂ ಅಂದ
ವಾದ ಕಾಡುಮೇಕೆಯಂತೆಯೂ ಇದ್ದಾಳೆ. ಆಕೆಯ ಸ್ತನ
ಗಳು ನಿನ್ನನ್ನು ಸಂಪೂರ್ಣವಾಗಿ ತೃಪ್ತಿಪಡಿಸಲಿ. ಆಕೆಯ

ಪ್ರೀತಿಯಲ್ಲೇ ಲೀನವಾಗಿರು. 20ಪರಸ್ತ್ರೀಯಲ್ಲಿ ಮೋಹ
ಗೊಂಡು ಆಕೆಯನ್ನು ಅಪ್ಪಿಕೊಳ್ಳಬೇಡ.
21ಮನುಷ್ಯನ ಮಾರ್ಗಗಳು ಯೆಹೋವನಿಗೆ ಕಾಣು
ತ್ತಲೇ ಇವೆ; ಯೆಹೋವನು ಅವುಗಳನ್ನು ಪರೀಕ್ಷಿಸುತ್ತಾನೆ.
22ಕೆಡುಕನ ಪಾಪಗಳು ಅವನನ್ನೇ ಹಿಡಿಯುತ್ತವೆ. ಅವನ
ಪಾಪಗಳು ಹಗ್ಗದಂತೆ ಅವನನ್ನೇ ಬಂಧಿಸುತ್ತವೆ. 23ಅವನು
ಬುದ್ಧಿವಾದವನ್ನು ತಿರಸ್ಕರಿಸಿದ್ದರಿಂದ ಸಾಯುವನು; ತನ್ನ
ಅತಿಮೂರ್ಖತನದಿಂದ ದಾರಿತಪ್ಪುವನು.

### ಜಾಮೀನಿನ ಅಪಾಯ

6 ನನ್ನ ಮಗನೇ, ಮತ್ತೊಬ್ಬನ ಸಾಲಕ್ಕೆ ನೀನು
ಜಾಮೀನಾಗಬೇಡ. ಅವನು ಸಾಲ ತೀರಿಸಲಾಗ
ದಿದ್ದರೆ ನಾನು ತೀರಿಸುತ್ತೇನೆ ಎಂದು ಪ್ರಮಾಣ ಮಾಡಿರು
ವೆಯಾ? 2ಮಾಡಿದ್ದರೆ, ಸಿಕ್ಕಿಕೊಂಡಿರುವೆ! ನಿನ್ನ ಸ್ವಂತ
ಮಾತೇ ನಿನ್ನನ್ನು ಬಲೆಗೆ ಸಿಕ್ಕಿಸಿದೆ! 3ನೀನು ಅವನ
ಅಧಿಕಾರದ ಅಧೀನದಲ್ಲಿರುವೆ. ಆದ್ದರಿಂದ ಅವನ ಬಳಿಗೆ
ಹೋಗಿ ನಿನ್ನನ್ನು ಸಾಲದಿಂದ ಬಿಡುಗಡೆ ಮಾಡುವಂತೆ
ಬೇಡಿಕೊ. 4ವಿಶ್ರಮಿಸಿಕೊಳ್ಳಬೇಕೆಂದಾಗಲೀ ನಿದ್ರಿಸ
ಬೇಕೆಂದಾಗಲೀ ತಡಮಾಡದಿರು. 5ಬೇಟೆಗಾರನಿಂದ
ತಪ್ಪಿಸಿಕೊಂಡು ಓಡುವ ಜಿಂಕೆಯಂತೆ ಆ ಸಾಲದ ಬಂಧನ
ದಿಂದ ತಪ್ಪಿಸಿಕೋ. ಬಲೆಯಿಂದ ತಪ್ಪಿಸಿಕೊಂಡು ಹಾರುವ
ಪಕ್ಷಿಯಂತೆ ನಿನ್ನನ್ನು ಬಿಡುಗಡೆ ಮಾಡಿಕೋ.

### ಸೋಮಾರಿತನದ ಅಪಾಯ

6ಸೋಮಾರಿಯೇ, ನೀನು ಇರುವೆಯಂತೆ ಚುರುಕಾ
ಗಿರಬೇಕು. ಇರುವೆಯನ್ನು ನೋಡಿ ಕಲಿತುಕೊ.
7ಇರುವೆಗೆ ರಾಜನಿಲ್ಲ, ಅಧಿಕಾರಿಯಿಲ್ಲ, ನಾಯಕನಿಲ್ಲ,
8ಆದರೆ ಸುಗ್ಗಿ ಕಾಲದಲ್ಲಿ ತನಗೆ ಬೇಕಾದ ಆಹಾರವನ್ನೆಲ್ಲ
ಅದು ಕೂಡಿಸಿಟ್ಟುಕೊಳ್ಳುವುದು. ಆದ್ದರಿಂದ ಚಳಿಗಾಲ
ದಲ್ಲಿ ಅದಕ್ಕೆ ಬೇಕಾದಷ್ಟು ಆಹಾರ ಇರುವುದು.
9ಸೋಮಾರಿಯೇ, ಇನ್ನೆಷ್ಟುಕಾಲ ಮಲಗಿಕೊಂಡಿ
ರುವೆ? ನಿನ್ನ ವಿಶ್ರಾಂತಿಯಿಂದ ಯಾವಾಗ ಎದ್ದೇಳುವೆ?
10ಸೋಮಾರಿಯು, “ಸ್ವಲ್ಪ ನಿದ್ರೆ, ಸ್ವಲ್ಪ ವಿಶ್ರಾಂತಿ” ಅನ್ನು
ವನು. 11ಆದರೆ ಅವನು ನಿದ್ರಿಸುತ್ತಲೇ ಇರುವನು; ಬಡವ
ನಾಗುತ್ತಲೇ ಹೋಗುವನು. ಅವನ ಸ್ಥಿತಿಯು ದರೋಡೆ
ಕೋರರು ಬಂದು ಇದ್ದದ್ದನ್ನೆಲ್ಲಾ ದೋಚಿಕೊಂಡು
ಹೋದಂತಾಗಿರುವುದು.

### ದುಷ್ಟನು

12ಕೆಡುಕನೂ ಅಯೋಗ್ಯನೂ ಆಗಿರುವವನು ಸುಳ್ಳಾ
ಡುತ್ತಾ ಅಡ್ಡಾಡುತ್ತಾನೆ. 13ಅವನು ಜನರನ್ನು ಮೋಸ
ಗೊಳಿಸಲು ತನ್ನ ಕಾಲುಗಳಿಂದಲೂ ಕೈಬೆರಳುಗ
ಳಿಂದಲೂ ಸನ್ನೆಮಾಡುತ್ತಾನೆ. 14ಅವನು ಕೆಡುಕ. ಎಲ್ಲಾ
ಸಮಯಗಳಲ್ಲಿ ಅವನು ಕೆಡುಕನ್ನೇ ಆಲೋಚಿಸುತ್ತಾನೆ;
ಎಲ್ಲೆಲ್ಲೂ ತೊಂದರೆ ಮಾಡುತ್ತಾನೆ. 15ಆದರೆ ಅವನಿಗೆ
ಆಪತ್ತು ಇದ್ದಕ್ಕಿದ್ದಂತೆ ಬರುವುದು. ಅವನು ನಾಶ
ವಾಗುವನು! ಅವನಿಗೆ ಸಹಾಯಮಾಡಲು ಯಾರೂ
ಇರುವುದಿಲ್ಲ!

### ಯೆಹೋವನು ದ್ವೇಷಿಸುವ ಏಳು ವಸ್ತುಗಳು

16 ಯೆಹೋವನು ಈ ಆರು ವಸ್ತುಗಳನ್ನು ದ್ವೇಷಿಸು
ತ್ತಾನೆ, ಇಲ್ಲ, ಏಳು ವಸ್ತುಗಳನ್ನು ದ್ವೇಷಿಸುತ್ತಾನೆ:
17 ಗರ್ವದ ಕಣ್ಣು, ಸುಳ್ಳಾಡುವ ನಾಲಿಗೆ, ನಿರಪರಾಧಿ
ಗಳನ್ನು ಕೊಲ್ಲುವ ಕೈ,
18 ದುರಾಲೋಚನೆ ಮಾಡುವ ಹೃದಯ, ಕೇಡು
ಮಾಡಲು ಓಡುವ ಕಾಲು,
19 ಅಸತ್ಯವಾಡುವ ಸುಳ್ಳುಸಾಕ್ಷಿ, ಮತ್ತು ಸಹೋದರ
ರಲ್ಲಿ ಜಗಳ ಬಿತ್ತುವ ವ್ಯಕ್ತಿ.

### ವ್ಯಭಿಚಾರದ ಕುರಿತು ಎಚ್ಚರಿಕೆ

20ನನ್ನ ಮಗನೇ, ನಿನ್ನ ತಂದೆಯ ಆಜ್ಞೆಗಳನ್ನು ಜ್ಞಾಪಕ
ಮಾಡಿಕೋ. ನಿನ್ನ ತಾಯಿಯ ಉಪದೇಶಗಳನ್ನು
ಮರೆಯಬೇಡ. 21ಯಾವಾಗಲೂ ಅವರ ಮಾತುಗಳನ್ನು
ಜ್ಞಾಪಕಮಾಡಿಕೋ. ಅವುಗಳನ್ನು ನಿನ್ನ ಕೊರಳಿಗೆ
ಕಟ್ಟಿಕೋ; ನಿನ್ನ ಹೃದಯದ ಮೇಲೆ ಇಟ್ಟುಕೋ. 22ನೀನು
ಹೋಗುವಲ್ಲೆಲ್ಲಾ ಅವರ ಉಪದೇಶಗಳು ನಿನ್ನನ್ನು
ನಡೆಸುತ್ತವೆ. ನೀನು ಮಲಗಿರುವಾಗಲೂ ಅವು ನಿನ್ನನ್ನು
ಕಾಯುತ್ತವೆ. ನೀನು ಎಚ್ಚರಗೊಂಡಾಗ ಅವು ನಿನ್ನೊಡನೆ
ಮಾತಾಡಿ ನಿನಗೆ ಮಾರ್ಗದರ್ಶನ ಮಾಡುತ್ತವೆ.
23ನಿನ್ನ ತಂದೆತಾಯಿಗಳ ಆಜ್ಞೆಗಳು ಮತ್ತು ಉಪದೇಶ
ಗಳು ನಿನಗೆ ನೀತಿಮಾರ್ಗವನ್ನು ತೋರಿಸುವ ಬೆಳಕಿ
ನಂತಿವೆ. ಅವು ನಿನ್ನನ್ನು ಸರಿಪಡಿಸಿ ಜೀವಮಾರ್ಗದಲ್ಲಿ
ನಡೆಯಲು ಸಹಾಯ ಮಾಡುತ್ತವೆ. 24ಅವು ನಿನ್ನನ್ನು ಕೆಟ್ಟ
ಹೆಂಗಸಿನ ಬಳಿಗೆ ಹೋಗದಂತೆ ತಡೆಯುತ್ತವೆ; ಗಂಡನನ್ನು
ಬಿಟ್ಟಂಥ ಹೆಂಗಸಿನ ನಯವಾದ ನುಡಿಗಳಿಂದ ತಪ್ಪಿಸಿ
ಕಾಪಾಡುತ್ತವೆ. 2ಆಕೆಯ ಬೆಡಗನ್ನು ಕಂಡು ಹೃದಯದಲ್ಲಿ
ಆಸೆಪಡಬೇಡ. ಆಕೆಯ ಕಣ್ಣುಗಳು ನಿನ್ನನ್ನು ವಶಮಾಡಿ
ಕೊಳ್ಳಲು ಬಿಡಬೇಡ. 26ಸೂಳೆಯು ಒಂದು ರೊಟ್ಟಿಗೇ
ಬರಬಹುದು; ಆದರೆ ಬೇರೊಬ್ಬನ ಹೆಂಡತಿಗೆ ನಿನ್ನ
ಜೀವವನ್ನೇ ಕಳೆದುಕೊಳ್ಳಬೇಕಾಗುವುದು.
27ಮಡಿಲಲ್ಲಿ ಬೆಂಕಿಯನ್ನಿಟ್ಟುಕೊಂಡರೆ ಬಟ್ಟೆ ಸುಡುವು
ದಿಲ್ಲವೇ? 28ಉರಿಯುವ ಕೆಂಡದ ಮೇಲೆ ನಡೆದರೆ
ಪಾದಗಳು ಸುಟ್ಟುಹೋಗುವುದಿಲ್ಲವೇ?
29ಬೇರೊಬ್ಬನ ಹೆಂಡತಿಯೊಡನೆ ಮಲಗಿಕೊಳ್ಳುವ
ವನಿಗೆ ಇದೇ ರೀತಿ ಯಾಗುವುದು. ಅವನು ದಂಡನೆ
ಅನುಭವಿಸುವನು.

30-31ಹಸಿವೆಗೊಂಡಿರುವವನು ಕದ್ದುತಿಂದರೂ ತಿನ್ನ
ಬಹುದು. ಅವನು ಸಿಕ್ಕಿಕೊಂಡರೆ ತಾನು ಕದ್ದದ್ದಕ್ಕಿಂತ
ಏಳರಷ್ಟು ಹೆಚ್ಚಾಗಿ ಕೊಡಬೇಕು. ಒಂದು ವೇಳೆ ಅವನು
ತನ್ನಲ್ಲಿರುವ ಪ್ರತಿಯೊಂದನ್ನೂ ಕೊಡಬೇಕಾಗಬಹುದು!
ಆದರೆ ಬೇರೆಯವರು ಅವನನ್ನು ಅರ್ಥಮಾಡಿಕೊಳ್ಳು
ತ್ತಾರೆ; ಅವನ ಬಗ್ಗೆ ಅವರಿಗಿರುವ ಗೌರವವು ಕಳೆದು
ಹೋಗುವುದಿಲ್ಲ.

32ಆದರೆ ವ್ಯಭಿಚಾರ ಮಾಡುವವನು ಮೂರ್ಖನಾಗಿ
ದ್ದಾನೆ. ಅದನ್ನು ಮಾಡುವವನು ತನ್ನನ್ನೇ ನಾಶಮಾಡಿ
ಕೊಳ್ಳುತ್ತಾನೆ. 33ಅವನಿಗೆ ಹೊಡೆತಬೀಳುವುದು; ಅವ
ಮಾನವಾಗುವುದು. ಆ ನಾಚಿಕೆಯು ಅವನನ್ನು ಬಿಟ್ಟು
ಹೋಗುವುದೇ ಇಲ್ಲ. 34ಆಕೆಯ ಗಂಡನು ಮತ್ಸರದಿಂದ
ಬಹು ಕೋಪಗೊಳ್ಳುವನು; ಕರುಣೆ ತೋರದೆ ಅವನ
ಮೇಲೆ ಸೇಡುತೀರಿಸಿಕೊಳ್ಳುವನು. 35ಏನೇ ಕೊಟ್ಟರೂ,
ಎಷ್ಟೇ ಹಣ ಕೊಟ್ಟರೂ ಅವನ ಕೋಪವನ್ನು ತಡೆಯ
ಲಾಗುವುದಿಲ್ಲ.

## ಜ್ಞಾನವು ನಿನ್ನನ್ನು ವ್ಯಭಿಚಾರದಿಂದ ದೂರವಿಡುತ್ತದೆ

7 ನನ್ನ ಮಗನೇ, ನನ್ನ ಮಾತುಗಳನ್ನು ಜ್ಞಾಪಕ
ಮಾಡಿಕೋ, ನನ್ನ ಆಜ್ಞೆಗಳನ್ನು ಮರೆಯಬೇಡ.
2ನನ್ನ ಆಜ್ಞೆಗಳಿಗೆ ವಿಧೇಯನಾಗು, ಆಗ ನೀನು
ಜೀವಿಸುವೆ. ನಿನ್ನ ಕಣ್ಣುಗುಡ್ಡೆಗಳೊ ಎಂಬಂತೆ ನನ್ನ ಉಪ
ದೇಶಗಳಿಗೆ ಎಚ್ಚರಿಕೆಯಿಂದ ವಿಧೇಯನಾಗಿರು. 3ಅವು
ಗಳನ್ನು ನಿನ್ನ ಬೆರಳುಗಳ ಸುತ್ತಲೂ ಕಟ್ಟಿಕೋ; ನಿನ್ನ
ಹೃದಯದ ಮೇಲೆ ಬರೆದುಕೋ, 4ಜ್ಞಾನವನ್ನು ನಿನ್ನ
ಸಹೋದರಿಯಂತೆ ಪ್ರೀತಿಸು. ವಿವೇಕವನ್ನು ನಿನ್ನ
ಕುಟುಂಬದಂತೆ ಪ್ರೀತಿಸು. 5ಆಗ ಅವು ನಿನ್ನನ್ನು ಬೇರೆ
ಹೆಂಗಸರಿಂದ ತಪ್ಪಿಸಿ ಕಾಪಾಡುತ್ತವೆ; ನಿನ್ನನ್ನು ಪಾಪಕ್ಕೆ
ನಡೆಸುವಂಥ ಅವರ ಸವಿ ಮಾತುಗಳಿಂದ ತಪ್ಪಿಸಿ
ಕಾಪಾಡುತ್ತವೆ.

6ಒಂದು ದಿನ ನಾನು ನನ್ನ ಮನೆಯ ಕಿಟಕಿಯಿಂದ
ನೋಡಿದಾಗ 7ಅನೇಕ ಮೂಢ ಯೌವನಸ್ಥರನ್ನು
ಕಂಡೆನು. ಅವರಲ್ಲಿ ತುಂಬಾ ಮೂಢನಾಗಿದ್ದ ಒಬ್ಬ
ಯೌವನಸ್ಥನನ್ನು ಗಮನಿಸಿದೆ. 8ಅವನು ಒಬ್ಬ ಕೆಟ್ಟ
ಹೆಂಗಸಿನ ಬೀದಿಯಲ್ಲಿ ಆಕೆಯ ಮನೆಯ ಕಡೆಗೆ ಹೋಗು
ತ್ತಿದ್ದನು. 9ಆಗ ಕತ್ತಲಾಗುತ್ತಿತ್ತು. ಸೂರ್ಯ ಮುಳುಗುತ್ತಿ
ದ್ದನು; ರಾತ್ರಿ ಆರಂಭವಾಗುತ್ತಿತ್ತು. 10ಆ ಹೆಂಗಸು ಅವ
ನನ್ನು ಎದುರುಗೊಳ್ಳಲು ಮನೆಯ ಹೊರಗಡೆ ಬಂದಳು.
ಆಕೆಯ ಉಡುಪು ವ್ಯಭಿಚಾರಿಣಿಯ ಉಡುಪಿನಂತಿತ್ತು.
ಅವನೊಡನೆ ಪಾಪಮಾಡಬೇಕೆಂಬ ಆಸೆ ಆಕೆಯಲ್ಲಿತ್ತು.
11ಅವಳು ಸುಮ್ಮನಿರದವಳೂ ಹಟಮಾರಿಯೂ ಆಗಿ
ದ್ದಾಳೆ. ಅವಳು ಎಂದೂ ಮನೆಯಲ್ಲಿ ಇದ್ದವಳಲ್ಲ.
12ಅವಳು ಪ್ರತಿಯೊಂದು ಮೂಲೆಯಲ್ಲೂ ಗಂಡಸರನ್ನು
ಬಲೆಗೆ ಹಾಕಿಕೊಳ್ಳಲು ಕಾದುಕೊಂಡಿರುವಳು. ಅವಳು
ಬೀದಿಗಳಲ್ಲಿ ನಡೆದು ಹೋದಳು. 13ಅವಳು ಆ ಯೌವನ
ಸ್ಥನನ್ನು ಹಿಡಿದುಕೊಂಡು ಮುದ್ದಿಟ್ಟಳು. ಅವಳು ನಾಚಿಕೆ
ಯಿಲ್ಲದೆ ಅವನಿಗೆ, 14“ಈ ದಿನ ನಾನು ಸಮಾಧಾನ ಯಜ್ಞ
ವನ್ನು ಅರ್ಪಿಸಬೇಕಿತ್ತು. ನನ್ನ ಹರಕೆಯನ್ನು ಸಲ್ಲಿಸಿದೆನು.
ಯಜ್ಞದಲ್ಲಿ ಉಳಿದ ಮಾಂಸ ನನ್ನಲ್ಲಿ ಬಹಳಷ್ಟಿದೆ.
15ಆದ್ದರಿಂದ ನನ್ನೊಂದಿಗೆ ಬರುವಂತೆ ನಿನ್ನನ್ನು ಕರೆಯಲು
ಬಂದೆ. ನಿನಗಾಗಿ ಹುಡುಕಾಡಿ ಈಗ ನಿನ್ನನ್ನು ಕಂಡು
ಕೊಂಡೆ. 16ನನ್ನ ಹಾಸಿಗೆಯನ್ನು ಈಜಿಪ್ಟಿನ ಸುಂದರವಾದ
ಹೊದಿಕೆಗಳಿಂದ ಹೊದಿಸಿ 17ಪರಿಮಳದ್ರವ್ಯವನ್ನು ಚಿಮಿಕಿ
ಸಿರುವೆ. ಆ ಪರಿಮಳ ದ್ರವ್ಯವನ್ನು ರಕ್ತಬೋಳ, ಅಗುರು
ಮತ್ತು ಲವಂಗ ಚಕ್ಕೆಗಳಿಂದ ತಯಾರಿಸಿರುವೆ. 18ಬಾ,
ನಾವು ಮುಂಜಾನೆಯವರೆಗೆ ಪ್ರೇಮಿಸೋಣ; ರಾತ್ರಿ
ಯೆಲ್ಲಾ ಸುಖಿಸೋಣ. 19ನನ್ನ ಗಂಡನು ವ್ಯಾಪಾರಕ್ಕಾಗಿ
ದೂರದೇಶಕ್ಕೆ ಹೋಗಿದ್ದಾನೆ. 20ದೀರ್ಘಪ್ರಯಾಣಕ್ಕೆ
ಬೇಕಾದಷ್ಟು ಹಣವನ್ನು ಅವನು ತನ್ನೊಡನೆ ತೆಗೆದು
ಕೊಂಡು ಹೋಗಿದ್ದಾನೆ; ಎರಡು ವಾರಗಳವರೆಗೆ ಅವನು
ಮನೆಗೆ ಬರುವುದಿಲ್ಲ” ಎಂದು ಹೇಳಿದಳು.

21ಅವಳು ಆ ಯೌವನಸ್ಥನನ್ನು ಪ್ರೇರೇಪಿಸಲು ಈ
ಮಾತುಗಳನ್ನಾಡಿದಳು. ಆಕೆಯ ಸವಿನುಡಿಗಳು ಅವನನ್ನು
ಮರುಳುಗೊಳಿಸಿತು. 22-23ಆ ಯೌವನಸ್ಥನು ಬಲೆಗೆ
ಸಿಕ್ಕಿಕೊಳ್ಳುವುದಕ್ಕಾಗಿ ಆಕೆಯನ್ನು ತಕ್ಷಣವೇ ಹಿಂಬಾಲಿ
ಸಿದನು. ಕೊಯ್ಯಲು ಎಳೆದೊಯ್ಯುವ ಹೋರಿ
ಯಂತೆಯೂ ಬೇಟೆಗಾರನು ಬಾಣಹೂಡಿ ಎದೆಗೆ ಗುರಿ
ಮಾಡಿರಲು ಜಿಗಿದುಕೊಂಡು ಹೋಗುವ ಜಿಂಕೆ
ಯಂತೆಯೂ ಬಲೆಯೊಳಗೆ ಹಾರಿ ಹೋಗುವ ಪಕ್ಷಿ
ಯಂತೆಯೂ ಅವನಿದ್ದನು. ತಾನು ಅಪಾಯದಲ್ಲಿರು
ವುದು ಅವನಿಗೆ ತಿಳಿದಿರಲಿಲ್ಲ.

24ಗಂಡುಮಕ್ಕಳೇ, ನನಗೆ ಕಿವಿಗೊಡಿರಿ. ನಾನು
ಹೇಳುವ ಮಾತುಗಳಿಗೆ ಗಮನಕೊಡಿರಿ. 25ಅಂತಹ
ಹೆಂಗಸಿನ ಬಗ್ಗೆ ಯೋಚಿಸಲೂಬೇಡಿ, ಆಕೆಗಾಗಿ ಅಲೆ
ದಾಡಲೂಬೇಡಿ. 26ಆಕೆಯಿಂದ ಅನೇಕ ಗಂಡಸರು
ಬಿದ್ದುಹೋಗಿದ್ದಾರೆ; ಅವಳು ಅನೇಕ ಗಂಡಸರನ್ನು ನಾಶ
ಮಾಡಿದ್ದಾಳೆ.

27ಅವಳ ಮನೆಯು ಪಾತಾಳದ ಮಾರ್ಗದಲ್ಲಿದೆ. ಅವಳ
ದಾರಿ ನೇರವಾಗಿ ಮರಣಕ್ಕೆ ನಡೆಸುತ್ತದೆ.

## ಜ್ಞಾನ – ಒಳ್ಳೆಯ ಸ್ತ್ರೀ

8 ಕೇಳಿ! ಜ್ಞಾನವು ಸಹ ನಿಮ್ಮನ್ನು ಕರೆಯುತ್ತಿದೆ.
ವಿವೇಕವು ಕಿವಿಗೊಡಿರಿ ಎಂದು ನಿಮ್ಮನ್ನು
ಕೂಗುತ್ತಿದೆ.
2 ರಸ್ತೆಗಳ ಚೌಕಗಳ ಬಳಿಯಿರುವ ಗುಡ್ಡದ
ಮೇಲ್ಭಾಗದಲ್ಲಿ ಆಕೆಯು ನಿಂತುಕೊಂಡಿದ್ದಾಳೆ.

3 ಪಟ್ಟಣದ ಹೆಬ್ಬಾಗಿಲುಗಳ ಬಳಿಯಿಂದಲೂ ತೆರೆದ ಬಾಗಿಲುಗಳ ಬಳಿಯಿಂದಲೂ ಕರೆಯುತ್ತಿದ್ದಾಳೆ.

4 ‘‘ಮನುಷ್ಯರೇ, ನಿಮ್ಮನ್ನೇ ಕರೆಯುತ್ತೇನೆ; ಎಲ್ಲಾ ಜನರನ್ನು ಕರೆಯುತ್ತೇನೆ.
5 ಮೂಢರೇ, ಜಾಣತನವನ್ನು ಕಲಿತುಕೊಳ್ಳಿರಿ; ಜ್ಞಾನ ಹೀನರೇ ಬುದ್ಧಿಯನ್ನು ಗ್ರಹಿಸಿಕೊಳ್ಳಿರಿ.
6 ಕೇಳಿ! ಶ್ರೇಷ್ಠವಾದವುಗಳನ್ನೂ ಯಥಾರ್ಥವಾದುವುಗಳನ್ನೂ ನಿಮಗೆ ತಿಳಿಸುವೆನು.
7 ನನ್ನ ಮಾತುಗಳು ಸತ್ಯ. ನನ್ನ ತುಟಿಗಳಿಗೆ ದುಷ್ಟತನ ಅಸಹ್ಯ.
8 ನನ್ನ ಮಾತುಗಳು ನೀತಿಯ ಮಾತುಗಳಾಗಿವೆ. ನನ್ನ ಮಾತುಗಳಲ್ಲಿ ತಪ್ಪಾಗಲೀ ದೋಷವಾಗಲೀ ಇಲ್ಲವೇ ಇಲ್ಲ.
9 ತಿಳುವಳಿಕೆಯುಳ್ಳವನಿಗೆ ನನ್ನ ಮಾತುಗಳು ಸ್ಪಷ್ಟವಾಗಿವೆ; ವಿವೇಕಿಗೆ ಯಥಾರ್ಥವಾಗಿವೆ.
10 ನನ್ನ ಉಪದೇಶವನ್ನು ಬೆಳ್ಳಿಗಿಂತಲೂ ನನ್ನ ಜ್ಞಾನವನ್ನು ಶುದ್ಧ ಬಂಗಾರಕ್ಕಿಂತಲೂ ಉತ್ತಮವೆಂದು ಸ್ವೀಕರಿಸಿಕೊಳ್ಳಿ.
11 ಜ್ಞಾನವು ಹವಳಕ್ಕಿಂತಲೂ ಶ್ರೇಷ್ಠ ಮನುಷ್ಯನ ಇಷ್ಟವಸ್ತುಗಳೆಲ್ಲವೂ ಅದಕ್ಕೆ ಸಮವಲ್ಲ.’’

## ಜ್ಞಾನವು ಮಾಡುವುದೇನು

12 ‘‘ನಾನೇ ಜ್ಞಾನ. ನಾನು ಒಳ್ಳೆಯ ನ್ಯಾಯ ತೀರ್ಪಿನೊಡನೆ ವಾಸಿಸುವೆ. ನಾನು ವಿವೇಕದೊಡನೆಯೂ ಒಳ್ಳೆಯ ಆಲೋಚನೆಯೊಡನೆಯೂ ಇರುವೆನು.
13 ಯೆಹೋವನಲ್ಲಿ ಭಯಭಕ್ತಿಯಿರುವವನು ಪಾಪವನ್ನು ದ್ವೇಷಿಸುತ್ತಾನೆ. ಜ್ಞಾನವೆಂಬ ನಾನು ಗರ್ವವನ್ನೂ ಅಹಂಭಾವವನ್ನೂ ದುರ್ಮಾರ್ಗತನವನ್ನೂ ಸುಳ್ಳಾಡುವ ಬಾಯನ್ನೂ ದ್ವೇಷಿಸುತ್ತೇನೆ.

14 ‘‘ಒಳ್ಳೆಯ ಆಲೋಚನೆಗಳೂ ಒಳ್ಳೆಯ ತೀರ್ಪುಗಳೂ ನನ್ನವೇ. ತಿಳುವಳಿಕೆಯೂ ಸಾಮರ್ಥ್ಯವೂ ನನ್ನಲ್ಲಿವೆ.
15 ನನ್ನ ಸಹಾಯದಿಂದ ರಾಜರುಗಳು ರಾಜ್ಯವಾಳುವರು; ಅಧಿಪತಿಗಳು ನ್ಯಾಯವಾದ ಕಾನೂನುಗಳನ್ನು ಮಾಡುವರು.
16 ನನ್ನ ಸಹಾಯದಿಂದ ಅಧಿಪತಿಗಳು ಆಡಳಿತ ಮಾಡುವರು; ನಾಯಕರು ದೊರೆತನ ಮಾಡುವರು.
17 ನನ್ನನ್ನು ಪ್ರೀತಿಸುವವರನ್ನು ನಾನೂ ಪ್ರೀತಿಸುವೆನು; ನನ್ನನ್ನು ಬಹಳವಾಗಿ ಹುಡುಕುವವರು ಕಂಡುಕೊಳ್ಳುವರು.
18 ನನ್ನಲ್ಲಿಯೂ ಸಹ ಕೊಡಲು ಐಶ್ವರ್ಯವಿದೆ ಮತ್ತು ಘನತೆಯಿದೆ. ನಾನು ಶಾಶ್ವತವಾದ ಐಶ್ವರ್ಯವನ್ನೂ ಯಶಸ್ಸನ್ನೂ ಕೊಡುವೆನು.
19 ನಾನು ಕೊಡುವಂಥವುಗಳು ಬಂಗಾರಕ್ಕಿಂತಲೂ ಶ್ರೇಷ್ಠ. ನನ್ನ ಉಡುಗೊರೆಗಳು ಅಪ್ಪಟ್ಟ ಬೆಳ್ಳಿಗಿಂತಲೂ ಉತ್ತಮ.
20 ನಾನು ನೀತಿಮಾರ್ಗದಲ್ಲಿಯೂ ನ್ಯಾಯಮಾರ್ಗದಲ್ಲಿಯೂ ನಡೆಯುತ್ತೇನೆ.
21 ನನ್ನನ್ನು ಪ್ರೀತಿಸುವವರಿಗೆ ನಾನು ಐಶ್ವರ್ಯವನ್ನು ಕೊಡುವೆನು. ಹೌದು, ಅವರ ಉಗ್ರಾಣಗಳನ್ನು ತುಂಬಿಸುವೆನು.

22 ‘‘ಯೆಹೋವನು ‘‘ಜ್ಞಾನ’’ವೆಂಬ ನನ್ನನ್ನು ತನ್ನ ಸೃಷ್ಟಿಕ್ರಮದಲ್ಲಿ ಮೊದಲು ನಿರ್ಮಿಸಿದನು.
23 ನಾನು ಆದಿಯಲ್ಲಿ ನಿರ್ಮಾಣಗೊಂಡೆನು. ಪ್ರಪಂಚವು ಆರಂಭವಾಗುವುದಕ್ಕಿಂತ ಮೊದಲೇ ನಾನು ನಿರ್ಮಿತನಾದೆನು.
24 ನಾನು ಸಾಗರಗಳಿಗಿಂತ ಮೊದಲೇ ಜನಿಸಿದೆನು; ಬುಗ್ಗೆಗಳ ನೀರು ಉಂಟಾಗುವುದಕ್ಕಿಂತ ಮೊದಲೇ ಜನಿಸಿದೆನು.
25 ನಾನು ಪರ್ವತಗಳಿಗಿಂತ ಮೊದಲೇ ಜನಿಸಿದೆನು; ಬೆಟ್ಟಗಳಿಗಿಂತ ಮೊದಲೇ ಹುಟ್ಟಿದೆನು.
26 ಯೆಹೋವನು ಭೂಮಿಯನ್ನು ಸೃಷ್ಟಿಸುವುದಕ್ಕಿಂತ ಮೊದಲೇ ಜ್ಞಾನವೆಂಬ ನಾನು ಹುಟ್ಟಿದೆನು. ನಾನು ಬಯಲುಗಳಿಗಿಂತ ಮೊದಲೇ ಹುಟ್ಟಿದೆನು. ದೇವರು ಭೂಮಿಯ ಮೊದಲನೆ ಧೂಳಿನ ಕಣವನ್ನು ಉಂಟು ಮಾಡುವುದಕ್ಕಿಂತ ಮೊದಲೇ ನಾನು ಹುಟ್ಟಿದೆನು.

27 ‘‘ಯೆಹೋವನು ಆಕಾಶವನ್ನು ಸೃಷ್ಟಿಸಿದ ಸಮಯದಲ್ಲಿ ಜ್ಞಾನವೆಂಬ ನಾನು ಅಲ್ಲಿದ್ದೆನು. ಯೆಹೋವನು ಸಾಗರದ ಎಲ್ಲೆಗಳನ್ನು ಗೊತ್ತುಪಡಿಸಿದಾಗ ಜ್ಞಾನವೆಂಬ ನಾನು ಅಲ್ಲಿದ್ದೆನು.
28 ಯೆಹೋವನು ಆಕಾಶದಲ್ಲಿ ಮೋಡಗಳನ್ನೂ ಸಾಗರಗಳಲ್ಲಿ ನೀರನ್ನೂ ನೆಲೆಗೊಳಿಸಿದಾಗ ನಾನು ಅಲ್ಲಿದ್ದೆನು.
29 ಯೆಹೋವನು ಸಮುದ್ರಗಳ ನೀರಿಗೆ ಎಲ್ಲೆಕಟ್ಟನ್ನು ಹಾಕಿದಾಗಲೂ ಭೂಮಿಗೆ ಅಸ್ತಿವಾರಗಳನ್ನು ಹಾಕಿದಾಗಲೂ ನಾನು ಅಲ್ಲಿದ್ದೆನು.
30 ನಾನು ಆತನ ಪಕ್ಕದಲ್ಲಿ ನಿಪುಣ ಕೆಲಸಗಾರನಂತಿದ್ದೆನು. ನಾನು ಪ್ರತಿದಿನವೂ ಸಂತೋಷಪಡುತ್ತಾ ಯೆಹೋವನ ಸನ್ನಿಧಿಯಲ್ಲಿ ಯಾವಾಗಲೂ ಉಲ್ಲಾಸಿಸುತ್ತಿದ್ದೆನು.

31 ಯೆಹೋವನು ಸೃಷ್ಟಿಸಿದ ಭೂಲೋಕದ ವಿಷಯ
ದಲ್ಲಿ ಉಲ್ಲಾಸಿಸುತ್ತಾ ಮಾನವ ಸಂತಾನದ ವಿಷಯ
ದಲ್ಲಿ ಹರ್ಷಿಸುತ್ತಾ ಇದ್ದೆನು.
32 ‘‘ಮಕ್ಕಳೇ, ನನಗೆ ಕಿವಿಗೊಡಿರಿ! ನನ್ನ ಮಾರ್ಗಗಳನ್ನು
ಅನುಸರಿಸುವವರು ಧನ್ಯರಾಗಿದ್ದಾರೆ.
33 ನನ್ನ ಉಪದೇಶಗಳನ್ನು ಕೇಳಿ ಜ್ಞಾನವಂತರಾಗಿರಿ.
ಕಿವಿಗೊಡದಿರಬೇಡಿ!
34 ನನಗೆ ಕಿವಿಗೊಡುವವನು ಧನ್ಯನಾಗಿದ್ದಾನೆ.
ಅವನು ಪ್ರತಿದಿನ ನನ್ನ ಮನೆಬಾಗಿಲುಗಳ ಬಳಿ
ಯಲ್ಲೂ ನನ್ನ ಬಾಗಿಲಿನ ನಿಲುವುಗಳ ಬಳಿಯಲ್ಲೂ
ಕಾದು ಕೊಂಡಿರುತ್ತಾನೆ.
35 ನನ್ನನ್ನು ಕಂಡುಕೊಂಡಂಥವನು ಜೀವವನ್ನು
ಕಂಡುಕೊಳ್ಳುತ್ತಾನೆ. ಅವನಿಗೆ ಯೆಹೋವನ
ಕೃಪೆಯು ದೊರೆಯುತ್ತದೆ.
36 ಆದರೆ ನನ್ನನ್ನು ಕಂಡುಕೊಳ್ಳಲಾರದವನು ತನಗೇ
ಕೇಡುಮಾಡಿಕೊಳ್ಳುವನು. ನನ್ನನ್ನು ದ್ವೇಷಿಸುವ
ಜನರೆಲ್ಲರೂ ಮರಣವನ್ನು ಪ್ರೀತಿಸುವರು.’’

### ಜ್ಞಾನ ಮತ್ತು ಮೂರ್ಖತನ

9 ಜ್ಞಾನ ಎಂಬಾಕೆ ತನ್ನ ಮನೆಯನ್ನು ಕಟ್ಟಿ
ಕೊಂಡಿದ್ದಾಳೆ. ಆಕೆ ಅದಕ್ಕೆ ಏಳು ಕಂಬಗಳನ್ನು ಹಾಕಿ
ದ್ದಾಳೆ. 2 ಜ್ಞಾನ ಎಂಬಾಕೆ ಮಾಂಸದ ಅಡಿಗೆಯನ್ನೂ
ದ್ರಾಕ್ಷಾರಸವನ್ನೂ ತಯಾರಿಸಿದ್ದಾಳೆ. ಆಕೆ ತನ್ನ ಮೇಜಿನ
ಮೇಲೆ ಆಹಾರವನ್ನು ಇಟ್ಟಿದ್ದಾಳೆ. 3 ಆಮೇಲೆ ಆಕೆ, ತನ್ನ
ಸೇವಕಿಯರನ್ನು ಕಳುಹಿಸಿ ನಗರದ ಎತ್ತರವಾದ ಸ್ಥಳ
ದಿಂದ, 4 ‘‘ಕಲಿತುಕೊಳ್ಳಬೇಕಾಗಿರುವ ಜನರೇ, ಬನ್ನಿರಿ’’
ಎಂದು ಪ್ರಕಟಿಸಿದಳು. ಆಕೆಯು ಮೂಢರಿಗೆ, 5 ‘‘ಬನ್ನಿರಿ,
ನನ್ನ ಜ್ಞಾನದ ಆಹಾರವನ್ನು ತಿನ್ನಿರಿ. ನಾನು ತಯಾರಿ
ಸಿರುವ ದ್ರಾಕ್ಷಾರಸವನ್ನು ಕುಡಿಯಿರಿ. 6 ನಿಮ್ಮ ಮೂರ್ಖ
ಮಾರ್ಗಗಳನ್ನು ತೊರೆದುಬಿಡಿ. ಆಗ ನಿಮಗೆ ಜೀವವು
ದೊರೆಯುವುದು. ವಿವೇಕಮಾರ್ಗದಲ್ಲಿ ಮುಂದೆ
ಸಾಗಿರಿ’’ ಎಂದು ಆಕೆ ಹೇಳಿದಳು.
7 ನೀನು ಅಹಂಕಾರಿಗೆ ಅವನ ತಪ್ಪನ್ನು ತಿಳಿಸಲು ಪ್ರಯತ್ನಿ
ಸಿದರೆ ಅವನು ನಿನ್ನನ್ನೇ ಖಂಡಿಸುವನು. ನೀನು ಕೆಡುಕನಿಗೆ
ಅವನ ತಪ್ಪನ್ನು ತಿಳಿಸಿದರೆ ಅವನು ನಿನ್ನನ್ನೇ ಗೇಲಿ
ಮಾಡುವನು. 8 ದುರಾಭಿಮಾನಿಯನ್ನು ಗದರಿಸಬೇಡ;
ಅವನು ನಿನ್ನನ್ನೇ ದ್ವೇಷಮಾಡುವನು. ಆದರೆ ನೀನು ಜ್ಞಾನಿ
ಯನ್ನು ಗದರಿಸಿದರೆ ಅವನು ನಿನ್ನನ್ನು ಪ್ರೀತಿಸುವನು.
9 ನೀನು ಜ್ಞಾನಿಗೆ ಉಪದೇಶಿಸಿದರೆ ಅವನು ಮತ್ತಷ್ಟು
ಜ್ಞಾನಿಯಾಗುವನು. ನೀನು ನೀತಿವಂತನಿಗೆ ಉಪದೇಶಿಸಿ
ದರೆ, ಅವನು ಮತ್ತಷ್ಟು ಕಲಿತುಕೊಳ್ಳುವನು.
10 ಯೆಹೋವನಲ್ಲಿ ಭಯಭಕ್ತಿಯಿಂದಿರುವುದೇ
ಜ್ಞಾನದ ಮೂಲ. ಯೆಹೋವನ ಜ್ಞಾನವನ್ನು ಪಡೆದು
ಕೊಳ್ಳುವುದೇ ವಿವೇಕದ ಮೂಲ. 11 ನೀನು ಜ್ಞಾನಿಯಾಗಿ
ದ್ದರೆ, ಬಹುಕಾಲ ಬದುಕುವೆ. 12 ನೀನು ಜ್ಞಾನಿಯಾಗಿದ್ದರೆ
ನಿನ್ನ ಜ್ಞಾನವು ನಿನಗೇ ಲಾಭಕರ. ಆದರೆ ನೀನು
ದುರಾಭಿಮಾನದಿಂದ ಬೇರೆಯವರನ್ನು ಗೇಲಿಮಾಡಿದರೆ
ನಿನ್ನನ್ನೇ ಕಷ್ಟಕ್ಕೆ ಗುರಿ ಮಾಡಿಕೊಳ್ಳುವೆ.
13 ಅಜ್ಞಾನವೆಂಬಾಕೆಯು ಬಾಯಿಬಡುಕಿ; ಮಂದಮತಿ
ಮತ್ತು ಮೂಢಳು, 14 ಅವಳು ತನ್ನ ಮನೆಯ ಬಾಗಿಲ
ಬಳಿಯಲ್ಲಿ ನಗರದ ಎತ್ತರವಾದ ಸ್ಥಳಗಳಲ್ಲಿ ಕುಳಿತಿದ್ದಾಳೆ.
15 ತಮ್ಮ ಕೆಲಸಕಾರ್ಯಗಳ ನಿಮಿತ್ತ ಹಾದು ಹೋಗುವ
ಜನರನ್ನು, 16 ‘‘ಕಲಿತುಕೊಳ್ಳಬೇಕಾಗಿರುವ ಜನರೇ ಬನ್ನಿ’’
ಎಂದು ಕೂಗಿ ಕರೆಯುತ್ತಾಳೆ. ಅವಳು ಮೂಢರನ್ನು ಸಹ
ಕರೆದು.
17 ‘‘ನೀವು ಕದ್ದ ನೀರು ಸ್ವಂತ ನೀರಿಗಿಂತಲೂ ಹೆಚ್ಚು
ರುಚಿಯಾಗಿರುವುದು. ನೀವು ಕದ್ದ ರೊಟ್ಟಿ ತಯಾರಿಸಿದ
ರೊಟ್ಟಿಗಿಂತಲೂ ಹೆಚ್ಚು ರುಚಿಯಾಗಿರುವುದು’’ ಎಂದು
ಹೇಳುವಳು.
18 ಆದರೆ ಆ ಮೂಢರಿಗೆ, ಅವಳ ಮನೆ ಕೇವಲ
ದೆವ್ವಗಳಿಂದ ತುಂಬಿರುವುದಾಗಲೀ ಆಕೆಯ ಅತಿಥಿಗಳು
ಅಗಾಧವಾದ ಪಾತಾಳದಲ್ಲಿ ಬಿದ್ದಿರುವುದಾಗಲೀ
ತಿಳಿದಿಲ್ಲ.

### ಸೊಲೊಮೋನನ ಜ್ಞಾನೋಕ್ತಿಗಳು

10 ಇವು ಸೊಲೊಮೋನನ ಜ್ಞಾನೋಕ್ತಿಗಳು:
ಜ್ಞಾನಿಯಾದ ಮಗನಿಂದ ತಂದೆಗೆ ಸಂತೋಷ.
ಮೂಢನಾದ ಮಗನಿಂದ ತಾಯಿಗೆ ದುಃಖ.
11 ಅನ್ಯಾಯದ ಹಣವು ನಿಷ್ಪ್ರಯೋಜಕವಾಗಿದೆ.
ನೀತಿಯ ಜೀವಿತವು ಮರಣದಿಂದ ರಕ್ಷಿಸಬಲ್ಲದು.
3 ನೀತಿವಂತರು ಹಸಿವೆಯಿಂದಿರಲು ಯೆಹೋವನು
ಬಿಡುವುದಿಲ್ಲ. ದುಷ್ಟರ ಆಸೆಯನ್ನಾದರೊ ಆತನು ಭಂಗ
ಪಡಿಸುತ್ತಾನೆ.
4 ಸೋಮಾರಿಯು ಬಡವನಾಗಿರುತ್ತಾನೆ. ಕಷ್ಟಪಟ್ಟು
ಕೆಲಸ ಮಾಡುವವನು ಐಶ್ವರ್ಯವಂತನಾಗುತ್ತಾನೆ.
5 ಬುದ್ಧಿವಂತನು ತಕ್ಕಕಾಲದಲ್ಲಿ ಬೆಳೆಯನ್ನು ಕೊಯ್ಯು
ತ್ತಾನೆ. ಸುಗ್ಗೀಕಾಲದಲ್ಲಿ ತೂಕಡಿಸುವವನು ನಾಚಿಕೆ
ಗೆಟ್ಟುವನು.
6 ಒಳ್ಳೆಯವನನ್ನು ಆಶೀರ್ವದಿಸುವಂತೆ ಜನರು ದೇವ
ರನ್ನು ಪ್ರಾರ್ಥಿಸುವರು. ದುಷ್ಟನ ಮಾತುಗಳಲ್ಲಾದರೊ
ಕುತಂತ್ರವೇ ಅಡಗಿಕೊಂಡಿದೆ.
7 ನೀತಿವಂತರ ನೆನಪು ಆಶೀರ್ವಾದದಾಯಕ. ಕೆಡುಕ
ರಾದರೊ ಬಹುಬೇಗನೆ ಮರೆಯಲ್ಪಡುವರು.
8 ಜ್ಞಾನಿಯು ಆಜ್ಞೆಗಳಿಗೆ ವಿಧೇಯನಾಗುತ್ತಾನೆ.
ಮೂಢನಾದರೊ ವಾದಮಾಡಿ ತನಗೇ ತೊಂದರೆ ತಂದು
ಕೊಳ್ಳುತ್ತಾನೆ.

[9]ಒಳ್ಳೆಯವನೂ ಯಥಾರ್ಥನೂ ಆದ ಮನುಷ್ಯನು ಕ್ಷೇಮವಾಗಿರುವನು. ಮೋಸಮಾಡುವ ಕುಟಿಲ ಮನುಷ್ಯನಾದರೂ ಸಿಕ್ಕಿಕೊಳ್ಳುವನು.

[10]ಸತ್ಯವನ್ನು ಅಡಗಿಸಿಕೊಳ್ಳುವವನು ತೊಂದರೆಯನ್ನು ಉಂಟುಮಾಡುವನು. ಮಾತುಗಾರನಾದ ಮೂಢನು ನಾಶ ವಾಗುವನು.

[11]ಒಳ್ಳೆಯವನ ಮಾತುಗಳು ನೀರಿನ ಬುಗ್ಗೆಯಂತೆ ಜೀವದಾಯಕ. ಕೆಡುಕನ ಮಾತುಗಳಲ್ಲಿ ಕೆಟ್ಟದ್ದೇ ಅಡಗಿಕೊಂಡಿರುತ್ತದೆ.

[12]ದ್ವೇಷವು ವಾದವನ್ನು ಉಂಟುಮಾಡುತ್ತದೆ. ಆದರೆ ಎಲ್ಲಾ ತಪ್ಪುಗಳನ್ನು ಪ್ರೀತಿಯು ಕ್ಷಮಿಸುತ್ತದೆ.

[13]ಬುದ್ಧಿವಂತನು ವಿವೇಕದಿಂದ ಮಾತಾಡುತ್ತಾನೆ. ಆದರೆ ಬುದ್ಧಿಹೀನನಿಗೆ ಹೊಡೆತ ಬೀಳುವುದು.

[14]ಜ್ಞಾನಿಗಳು ಮೌನವಾಗಿದ್ದು ಹೊಸ ಸಂಗತಿಗಳನ್ನು ಕಲಿತುಕೊಳ್ಳುತ್ತಾರೆ. ಮೂಢರಾದರೊ ಮಾತಾಡಿ ತಮಗೇ ತೊಂದರೆಯನ್ನು ತಂದುಕೊಳ್ಳುತ್ತಾರೆ.

[15]ಐಶ್ವರ್ಯವು ಸಾಹುಕಾರನನ್ನು ಕಾಪಾಡುತ್ತದೆ. ಬಡತನ ವಾದರೊ ಬಡವನನ್ನು ನಾಶಗೊಳಿಸುತ್ತದೆ.

[16]ಒಳ್ಳೆಯವರಿಗೆ ಪ್ರತಿಫಲವಾಗಿ ಜೀವ ದೊರೆಯುವುದು. ಕೆಡುಕರಿಗೆ ದಂಡನೆಯೇ ಸಂಬಳ.

[17]ಶಿಸ್ತನ್ನು ಸ್ವೀಕರಿಸಿಕೊಳ್ಳುವವನು ಜೀವಮಾರ್ಗವನ್ನು ತೋರಿಸುತ್ತಾನೆ. ತಿದ್ದುಪಡಿಯನ್ನು ಅಲಕ್ಷಿಸುವವನು ಇತರರನ್ನು ದಾರಿತಪ್ಪಿಸುತ್ತಾನೆ.

[18]ದ್ವೇಷವನ್ನು ಮರೆಮಾಡಲು ಒಬ್ಬನು ಸುಳ್ಳು ಹೇಳಬೇಕಾಗಬಹುದು. ಆದರೆ ಹರಟೆಗಾರನು ನಿಜವಾಗಿಯೂ ಮೂಢನಾಗಿದ್ದಾನೆ.

[19]ಅತಿಯಾಗಿ ಮಾತಾಡುವವನು ತನ್ನನ್ನೇ ತೊಂದರೆಗೆ ಸಿಕ್ಕಿಸಿಕೊಳ್ಳುತ್ತಾನೆ. ವಿವೇಕಿಯು ಮೌನವಾಗಿರಲು ಕಲಿತುಕೊಳ್ಳುತ್ತಾನೆ.

[20]ಒಳ್ಳೆಯವನ ಮಾತುಗಳು ಶುದ್ಧ ಬೆಳ್ಳಿಯಂತಿವೆ. ಕೆಡುಕನ ಆಲೋಚನೆಗಳಾದರೊ ಪ್ರಯೋಜನಕ್ಕೆ ಬಾರವು.

[21]ಒಳ್ಳೆಯವನ ಮಾತುಗಳು ಅನೇಕರಿಗೆ ಸಹಾಯ ಮಾಡುತ್ತವೆ. ಮೂಢನ ಮೂಢತನವಾದರೊ ಅನೇಕರನ್ನು ಕೊಲ್ಲುವುದು.

[22]ಐಶ್ವರ್ಯವು ಯೆಹೋವನ ಆಶೀರ್ವಾದವೇ. ಶ್ರಮದ ಕೆಲಸವು ಅದನ್ನು ಹೆಚ್ಚಿಸಲಾರದು.

[23]ಮೂಢನು ಕೆಟ್ಟದ್ದನ್ನು ಮಾಡುವುದರಲ್ಲಿ ಸಂತೋಷಿಸುತ್ತಾನೆ. ಜ್ಞಾನಿಯು ಜ್ಞಾನದಲ್ಲಿ ಸಂತೋಷಿಸುತ್ತಾನೆ.

[24]ಕೆಡುಕನಿಗೆ ಅವನು ಭಯಪಡುವುದೇ ಸಂಭವಿಸುವುದು. ಒಳ್ಳೆಯವನಾದರೊ ತನಗೆ ಬೇಕಾದದ್ದನ್ನೆಲ್ಲ ಪಡೆದುಕೊಳ್ಳುವನು.

[25]ಆಪತ್ತು ಬಂದಾಗ ದುಷ್ಟನು ನಾಶವಾಗುವನು. ಆದರೆ ಒಳ್ಳೆಯವರು ಸದಾಕಾಲ ಬಲವಾಗಿ ನಿಲ್ಲುವರು.

[26]ಸೋಮಾರಿಗೆ ಯಾವ ಕೆಲಸವನ್ನೂ ಒಪ್ಪಿಸಬೇಡಿ. ಅವನು ಬಾಯಿಗೆ ಹುಳಿಯಂತೆಯೂ ಕಣ್ಣುಗಳಿಗೆ ಹೊಗೆಯಂತೆಯೂ ನಿಮ್ಮನ್ನು ಬೇಸರಗೊಳಿಸುವನು.

[27]ನೀವು ಯೆಹೋವನಲ್ಲಿ ಭಯಭಕ್ತಿಯುಳ್ಳವರಾಗಿದ್ದರೆ ಬಹುಕಾಲ ಬದುಕುವಿರಿ. ಆದರೆ ಕೆಡುಕರು ತಮ್ಮ ಜೀವಮಾನದ ವರ್ಷಗಳನ್ನು ಕಳೆದುಕೊಳ್ಳುವರು.

[28]ಒಳ್ಳೆಯವರ ನಿರೀಕ್ಷೆಗೆ ಸಂತೋಷವೇ ಫಲಿತಾಂಶ. ಕೆಟ್ಟವರ ನಿರೀಕ್ಷೆಗೆ ಶೂನ್ಯವೇ ಫಲಿತಾಂಶ.

[29]ಯೆಹೋವನು ಒಳ್ಳೆಯವರನ್ನು ಕೋಟೆಯಂತೆ ಕಾಪಾಡುತ್ತಾನೆ; ಕೆಡುಕರನ್ನಾದರೊ ನಾಶಮಾಡುತ್ತಾನೆ.

[30]ಒಳ್ಳೆಯವರು ಯಾವಾಗಲೂ ಕ್ಷೇಮವಾಗಿರುವರು. ಆದರೆ ಕೆಡುಕರನ್ನು ದೇಶದಿಂದ ಬಲವಂತವಾಗಿ ಹೊರಗಟ್ಟಲಾಗುವುದು.

[31]ಒಳ್ಳೆಯವರು ಯಾವಾಗಲೂ ಜ್ಞಾನದ ಮಾತುಗಳನ್ನು ಹೇಳುತ್ತಾರೆ; ಮೋಸಕರವಾದ ಸುಳ್ಳುಗಾರರನ್ನಾದರೊ ಮೌನಗೊಳಿಸಲಾಗುವುದು.

[32]ಒಳ್ಳೆಯವನು ಯೋಗ್ಯವಾದವುಗಳನ್ನು ಹೇಳುವನು. ಕೆಡುಕನು ಸುಳ್ಳನ್ನು ಮಾತ್ರ ಹೇಳುತ್ತಾನೆ.

11 ಯೆಹೋವನು ಮೋಸದ ತಕ್ಕಡಿಗಳನ್ನು ದ್ವೇಷಿಸುತ್ತಾನೆ. ನ್ಯಾಯವಾದ ತಕ್ಕಡಿಗಳಾದರೊ ಆತನನ್ನು ಸಂತೋಷಗೊಳಿಸುತ್ತವೆ.

[2]ದುರಾಭಿಮಾನಿಗಳು ನಾಚಿಕೆಗೀಡಾಗುವರು; ದೀನರು ಜ್ಞಾನಿಗಳಾಗಿದ್ದಾರೆ.

[3]ಒಳ್ಳೆಯವರಿಗೆ ಯಥಾರ್ಥತೆಯು ಮಾರ್ಗದರ್ಶಕ. ಕೆಡುಕರು ತಮ್ಮ ಮೋಸಕೃತ್ಯಗಳ ಮೂಲಕ ತಮ್ಮನ್ನೇ ನಾಶಮಾಡಿಕೊಳ್ಳುತ್ತಾರೆ.

[4]ದೇವರು ಜನರಿಗೆ ನ್ಯಾಯತೀರ್ಪು ಮಾಡುವ ದಿನದಲ್ಲಿ, ಹಣದಿಂದ ಯಾವ ಲಾಭವೂ ಇಲ್ಲ. ಆದರೆ ಒಳ್ಳೆಯತನವು ಜನರನ್ನು ಮರಣದಿಂದ ಕಾಪಾಡುತ್ತದೆ.

[5]ನೀತಿವಂತನು ಯಥಾರ್ಥವಾಗಿದ್ದರೆ ಅವನ ಜೀವನವು ಸರಾಗವಾಗಿರುವುದು. ಆದರೆ ಕೆಡುಕನು ತನ್ನ ಕೆಟ್ಟ ಕಾರ್ಯಗಳಿಂದ ನಾಶವಾಗುವನು.

[6]ನೀತಿಯು ಯಥಾರ್ಥವಂತರನ್ನು ಕಾಪಾಡುತ್ತದೆ. ಆದರೆ ವಂಚಕರು ತಮ್ಮ ಆಸೆಗಳಿಂದಲೇ ಸಿಕ್ಕಿಬೀಳುವರು.

[7]ದುಷ್ಟನು ಸಾಯುವಾಗ ಅವನ ನಿರೀಕ್ಷೆಗಳೆಲ್ಲಾ ನಾಶವಾಗುತ್ತವೆ. ಅವನ ಅಪೇಕ್ಷೆಗಳೆಲ್ಲಾ ಕೊನೆಗೊಳ್ಳುತ್ತವೆ.

[8]ನೀತಿವಂತನು ಇಕ್ಕಟ್ಟಿನಿಂದ ಪಾರಾಗುವನು. ಅವನ ಬದಲಾಗಿ ಕೆಡುಕನು ಇಕ್ಕಟ್ಟಿನಲ್ಲಿ ಸಿಕ್ಕಿಬೀಳುವನು.

[9]ಕೆಡುಕನು ತನ್ನ ಮಾತಿನಿಂದಲೇ ಬೇರೆಯವರನ್ನು ನಾಶಪಡಿಸುತ್ತಾನೆ. ನೀತಿವಂತರಿಗಾದರೋ ಅವರ ಜ್ಞಾನವೇ ರಕ್ಷಣೆ ನೀಡುವುದು.

[10]ನೀತಿವಂತರಿಗೆ ಜಯವಾದರೆ ನಗರಕ್ಕೆಲ್ಲ ಸಂತಸ. ಕೆಡುಕರು ನಾಶವಾದರೆ ಜನರು ಜಯಘೋಷ ಮಾಡುವರು.

[11]ಪಟ್ಟಣವು ತನ್ನಲ್ಲಿ ವಾಸವಾಗಿರುವ ನೀತಿವಂತರ ಆಶೀರ್ವಾದದಿಂದ ಏಳಿಗೆ ಹೊಂದುವುದು. ಕೆಡುಕರ ಮಾತುಗಳು ಪಟ್ಟಣವನ್ನು ನಾಶಮಾಡುತ್ತವೆ.

[12]ಮೂಢನು ಇತರರನ್ನು ಹೀನೈಸುತ್ತಾನೆ. ಆದರೆ ಬುದ್ಧಿವಂತನು ಮೌನವಾಗಿರುತ್ತಾನೆ.

[13]ಗುಟ್ಟು ರಟ್ಟುಮಾಡುವವನನ್ನು ನಂಬಲಾಗದು. ಆದರೆ ನಂಬಿಗಸ್ತನು ವಿಷಯಗಳನ್ನು ರಹಸ್ಯವಾಗಿಡುವನು.

[14]ಜ್ಞಾನದ ಮಾರ್ಗದರ್ಶನವಿಲ್ಲದೆ ದೇಶವು ಬಿದ್ದುಹೋಗುವುದು. ಆದರೆ ಒಳ್ಳೆಯ ಸಲಹೆಗಾರರನ್ನು ಹೊಂದಿರುವ ದೇಶವು ಕ್ಷೇಮವಾಗಿರುವುದು.

[15]ಬೇರೊಬ್ಬನ ಸಾಲಕ್ಕೆ ನೀನು ಜಾಮೀನಾಗಿದ್ದರೆ ಕಷ್ಟಕ್ಕೀಡಾಗಿರುವೆ; ನೀನು ಜಾಮೀನಾಗಿಲ್ಲದಿದ್ದರೆ ಕ್ಷೇಮವಾಗಿರುವೆ.

[16]ದಯಾಳುವಾದ ಸ್ತ್ರೀಯು ಗೌರವವನ್ನು ಪಡೆಯುವಳು. ಬಲಾತ್ಕಾರಿಗಳಾದ ಗಂಡಸರು ಕೇವಲ ಹಣವನ್ನು ಗಳಿಸುವರು.

[17]ದಯೆಯುಳ್ಳವನು ತನಗೆ ಲಾಭ ಮಾಡಿಕೊಳ್ಳುವನು. ಕ್ರೂರಿಯು ತನಗೇ ಕೇಡುಮಾಡಿಕೊಳ್ಳುವನು.

[18]ಕೆಡುಕನು ತಾತ್ಕಾಲಿಕವಾದ ಲಾಭವನ್ನು ಮಾಡಿಕೊಳ್ಳುತ್ತಾನೆ. ಆದರೆ ನೀತಿವಂತನು ಯೋಗ್ಯವಾದ ಪ್ರತಿಫಲವನ್ನು ಹೊಂದಿಕೊಳ್ಳುವನು.

[19]ನೀತಿವಂತನು ನಿಜವಾಗಿಯೂ ಜೀವವನ್ನು ಹೊಂದಿಕೊಳ್ಳುವನು, ಆದರೆ ಕೆಡುಕನನ್ನು ಹಿಂಬಾಲಿಸುತ್ತಾ ಹೋಗುವವನು ಸಾವಿಗೀಡಾಗುವನು.

[20]ಕೆಡುಕರು ಯೆಹೋವನಿಗೆ ಅಸಹ್ಯ. ಆದರೆ ಸನ್ಮಾರ್ಗಿಗಳು ಆತನ ಮೆಚ್ಚಿಕೆಗೆ ಪಾತ್ರರಾಗಿದ್ದಾರೆ.

[21]ಕೆಡುಕರಿಗೆ ದಂಡನೆ ಖಂಡಿತ. ಒಳ್ಳೆಯವರಿಗೆ ಬಿಡುಗಡೆ ನಿಶ್ಚಯ.

[22]ಮೂರ್ಖಳಿಗೆ ಸೌಂದರ್ಯವು ಹಂದಿಯ ಮೂಗಿನಲ್ಲಿರುವ ಸುಂದರವಾದ ಚಿನ್ನದ ಮೂಗುತಿಯಂತಿರುವುದು.

[23]ಒಳ್ಳೆಯವರ ಬಯಕೆ ಅವರನ್ನು ಕ್ಷೇಮಕ್ಕೆ ನಡೆಸುತ್ತದೆ. ಆದರೆ ದುಷ್ಟರ ಆಕಾಂಕ್ಷೆ ಅವರನ್ನು ದಂಡನೆಗೆ ನಡೆಸುತ್ತದೆ.

[24]ಉಚಿತವಾಗಿ ಕೊಡುವವನು ಅದಕ್ಕಿಂತಲೂ ಹೆಚ್ಚು ಗಳಿಸುವನು. ಆದರೆ ಕೊಡಲೊಲ್ಲದವನು ಬಡವನಾಗುವನು.

[25]ಉದಾರಿಯು ಅಭಿವೃದ್ಧಿಯಾಗುವನು. ಬೇರೆಯವರಿಗೆ ಸಹಾಯಮಾಡುವವನು ಸಹಾಯವನ್ನು ಹೊಂದಿಕೊಳ್ಳುವನು.

[26]ಧಾನ್ಯವನ್ನು ಮಾರದೆ ಕೂಡಿಟ್ಟುಕೊಳ್ಳುವವನನ್ನು ಜನರು ಶಪಿಸುವರು. ಧಾನ್ಯವನ್ನು ಮಾರುವವನನ್ನು ಜನರು ಆಶೀರ್ವದಿಸುವರು.

[27]ಒಳ್ಳೆಯದನ್ನು ಮಾಡುವವನನ್ನು ಜನರು ಗೌರವಿಸುವರು. ಕೇಡನ್ನು ಮಾಡುವವನಿಗೆ ಕೇವಲ ಕೇಡೇ ಆಗುವುದು.

[28]ಐಶ್ವರ್ಯದ ಮೇಲೆ ಭರವಸೆಯಿಟ್ಟಿರುವವನು ಎಲೆಯಂತೆ ಉದುರಿಹೋಗುವನು. ಆದರೆ ಒಳ್ಳೆಯವನು ಚಿಗುರಿದ ಎಲೆಯಂತೆ ಬೆಳೆಯುವನು.

[29]ತನ್ನ ಕುಟುಂಬಕ್ಕೆ ತೊಂದರೆ ಕೊಡುವವನಿಗೆ ಆಸ್ತಿಯು ದೊರೆಯುವುದಿಲ್ಲ. ಮೂಢನು ಬಲವಂತಕ್ಕೊಳಗಾಗಿ ಜ್ಞಾನಿಯ ಸೇವೆ ಮಾಡಬೇಕಾಗುವುದು.

[30]ನೀತಿವಂತನ ಕಾರ್ಯಗಳು ಜೀವವುಳ್ಳ ಮರಗಳಂತಿವೆ. ಜ್ಞಾನಿಯು ಆತ್ಮಗಳನ್ನು ಗೆದ್ದುಕೊಳ್ಳುವನು.

[31]ನೀತಿವಂತರು ಭೂಮಿಯ ಮೇಲೆ ಪ್ರತಿಫಲವನ್ನು ಹೊಂದುವುದಾದರೆ ಕೆಡುಕರು ಸಹ ತಮಗೆ ಬರತಕ್ಕ ದಂಡನೆ ಯನ್ನು ಹೊಂದುವುದು ನಿಶ್ಚಯ.

12 ಜ್ಞಾನವನ್ನು ಪ್ರೀತಿಸುವವನು ಶಿಸ್ತನ್ನು ಪ್ರೀತಿಸುತ್ತಾನೆ. ತಿದ್ದುಪಡಿಯನ್ನು ದ್ವೇಷಿಸುವವನು ಬುದ್ಧಿಹೀನ.

[2]ಯೆಹೋವನು ಒಳ್ಳೆಯವನನ್ನು ಸ್ವೀಕರಿಸಿಕೊಳ್ಳುವನು; ಕುಯುಕ್ತಿಯುಳ್ಳವನನ್ನು ಖಂಡಿಸುವನು.

[3]ಕೆಡುಕನಿಗೆ ಎಂದಿಗೂ ಕ್ಷೇಮವಿಲ್ಲ; ಒಳ್ಳೆಯವರಾದರೊ ಸಮಾಧಾನದಿಂದಿರುವರು.

[4]ಗುಣವಂತಳಾದ ಹೆಂಡತಿಯು ಗಂಡನಿಗೆ ಕಿರೀಟದಂತಿರುವಳು; ಗಂಡನನ್ನು ನಾಚಿಕೆಗೆ ಗುರಿಮಾಡುವ ಹೆಂಡತಿಯು ಗಂಡನ ಎಲುಬಿಗೆ ಕ್ಷಯದಂತಿರುವಳು.

[5]ನೀತಿವಂತರ ಆಲೋಚನೆ ನ್ಯಾಯವಾಗಿವೆ. ದುಷ್ಟರ ಉಪದೇಶ ಮೋಸಕರ.

[6]ಕೆಡುಕರು ತಮ್ಮ ಮಾತುಗಳಿಂದ ಬೇರೆಯವರನ್ನು ನೋಯಿಸುತ್ತಾರೆ. ಒಳ್ಳೆಯವರ ಮಾತುಗಳಾದರೊ ಜನರನ್ನು ಅಪಾಯದಿಂದ ರಕ್ಷಿಸುತ್ತವೆ.

[7]ಕೆಡುಕರು ಸರ್ವನಾಶವಾಗುವರು; ಆದರೆ ಒಳ್ಳೆಯವನ ಕುಟುಂಬವು ಸ್ಥಿರವಾಗಿರುವುದು.

[8]ಜನರು ಜ್ಞಾನಿಗಳನ್ನು ಹೊಗಳುವರು; ಮೂಢನನ್ನು ಕಡೆಗಣಿಸುವರು.

[9]ಪ್ರಮುಖನಂತೆ ವರ್ತಿಸುತ್ತಾ ಆಹಾರವಿಲ್ಲದಿರುವುದಕ್ಕಿಂತ ಪ್ರಮುಖನಲ್ಲದವನಾಗಿದ್ದು ಸೇವಕನಂತೆ ಇರುವುದು ಮೇಲು.

10ಒಳ್ಳೆಯವನು ತನ್ನ ಪಶುಗಳನ್ನು ನೋಡಿಕೊಳ್ಳುತ್ತಾನೆ. ಆದರೆ ಕೆಡುಕರ ವಾತ್ಸಲ್ಯವು ಕ್ರೂರವಾಗಿದೆ.

11ತನ್ನ ಜಮೀನಿನಲ್ಲಿ ದುಡಿಯುವ ರೈತನಿಗೆ ಸಾಕಷ್ಟು ಆಹಾರವಿರುವುದು. ಆದರೆ ಮೂಢನು ಪ್ರಯೋಜನವಿಲ್ಲದ ಸಂಗತಿಗಳಲ್ಲಿ ತನ್ನ ಸಮಯವನ್ನು ಹಾಳು ಮಾಡುವನು.

12ಕಳವುಮಾಲುಗಳಲ್ಲಿ ದುಷ್ಟರಿಗೆ ಆಸೆ. ಒಳ್ಳೆಯವರಿಗಾದರೊ ತಮ್ಮಲ್ಲಿರುವುದನ್ನು ಬೇರೆಯವರಿಗೆ ಕೊಡಬೇಕೆಂಬ ಆಸೆ.

13ಕೆಡುಕನು ತನ್ನ ಕೆಟ್ಟಮಾತುಗಳಿಂದಲೇ ಸಿಕ್ಕಿಕೊಳ್ಳುವನು. ಆದರೆ ಒಳ್ಳೆಯವನು ಇಕ್ಕಟ್ಟುಗಳಿಂದ ಪಾರಾಗುವನು.

14ಮನುಷ್ಯನು ತನ್ನ ಒಳ್ಳೆಯ ಮಾತುಗಳಿಗೆ ಪ್ರತಿಫಲವನ್ನು ಪಡೆಯುವನು. ಅದೇ ರೀತಿಯಲ್ಲಿ, ಅವನ ಕೆಲಸವು ಅವನಿಗೆ ಲಾಭವನ್ನು ಕೊಡುವುದು.

15ಮೂಢನು ತನ್ನ ದಾರಿಯನ್ನೇ ಒಳ್ಳೆಯದೆಂದು ಭಾವಿಸಿ ಕೊಂಡಿರುತ್ತಾನೆ. ಜ್ಞಾನಿಯಾದರೊ ಉಪದೇಶಕ್ಕೆ ಕಿವಿಗೊಡುತ್ತಾನೆ.

16ಮೂಢನು ತನ್ನ ಸಿಟ್ಟನ್ನು ತಟ್ಟನೆ ತೋರಿಸುವನು. ಆದರೆ ಜ್ಞಾನಿಯು ಅವಮಾನವನ್ನು ಕಡೆಗಣಿಸುವನು.

17ಸತ್ಯಸಾಕ್ಷಿಯು ನ್ಯಾಯವನ್ನು ಪ್ರತಿಪಾದಿಸುವನು. ಆದರೆ ಸುಳ್ಳುಸಾಕ್ಷಿಯು ಅನ್ಯಾಯವನ್ನು ಪ್ರಕಟಿಸುವನು.

18ದುಡುಕಿದ ಮಾತು ಖಡ್ಗದಂತೆ ನೋವು ಮಾಡುತ್ತದೆ; ಜ್ಞಾನಿಯ ಮಾತು ಗುಣಪಡಿಸುತ್ತದೆ.

19ಸುಳ್ಳುತುಟಿಗಳು ಕ್ಷಣಿಕ. ಆದರೆ ಸತ್ಯವು ಶಾಶ್ವತ.

20ಕೆಡುಕರು ಯಾವಾಗಲೂ ಕೇಡುಮಾಡಲಿಚ್ಛಿಸುವರು. ಸಮಾಧಾನವನ್ನು ಅಪೇಕ್ಷಿಸುವವರು ಸಂತೋಷವಾಗಿರುವರು.

21ಒಳ್ಳೆಯವರು ಯೆಹೋವನಿಂದ ಕ್ಷೇಮವಾಗಿರುವರು. ಆದರೆ ಕೆಡುಕರಿಗೆ ಅನೇಕ ತೊಂದರೆಗಳಿರುತ್ತವೆ.

22ಸುಳ್ಳುಗಾರರು ಯೆಹೋವನಿಗೆ ಅಸಹ್ಯ. ಆದರೆ ಯಥಾರ್ಥವಂತರು ಆತನಿಗೆ ಇಷ್ಟಕರ.

23ಜಾಣನು ತನ್ನ ಜ್ಞಾನದ ಬಗ್ಗೆ ಜಂಬಕೊಚ್ಚಿಕೊಳ್ಳುವುದಿಲ್ಲ. ಆದರೆ ಮೂಢನು ದುಡುಕಿ ಮಾತಾಡಿ ತಾನು ಮೂಢನಲ್ಲವೆಂದು ತೋರಿಸಿಕೊಳ್ಳುತ್ತಾನೆ.

24ಕಷ್ಟಪಟ್ಟು ಕೆಲಸ ಮಾಡುವವನು ಅಧಿಪತಿಯಾಗುವನು. ಸೋಮಾರಿಯನ್ನು ಗುಲಾಮನನ್ನಾಗಿ ಮಾಡಲಾಗುವುದು.

25ಚಿಂತೆಯು ಮನುಷ್ಯನ ಸಂತೋಷವನ್ನು ತೆಗೆದು ಹಾಕುತ್ತದೆ; ಕನಿಕರದ ಮಾತು ಮನುಷ್ಯನನ್ನು ಸಂತೋಷಗೊಳಿಸುತ್ತದೆ.

26ನೀತಿವಂತನು ತನ್ನ ನೆರೆಯವನಿಗೆ ಒಳ್ಳೆಯ ಮಾರ್ಗವನ್ನು ತೋರಿಸುತ್ತಾನೆ; ದುಷ್ಟನ ಮಾರ್ಗವು ಬೇರೆಯವರನ್ನು ದಾರಿ ತಪ್ಪಿಸುತ್ತದೆ.

27ಸೋಮಾರಿಯಾದ ಬೇಟೆಗಾರನು ಬೇಟೆಯಾಡುವುದಿಲ್ಲ. ಐಶ್ವರ್ಯವು ಕಷ್ಟಪಟ್ಟು ಕೆಲಸ ಮಾಡುವವನಿಗೆ ಬರುತ್ತದೆ.

28ನೀತಿಯ ಮಾರ್ಗದಲ್ಲಿ ಜೀವವಿದೆ. ಆದರೆ ಮರಣಕ್ಕೆ ನಡೆಸುವ ಮತ್ತೊಂದು ಮಾರ್ಗವಿದೆ.

13 ಜ್ಞಾನಿಯಾದ ಮಗನು ತನ್ನ ತಂದೆಯ ಮಾತುಗಳನ್ನು ಎಚ್ಚರಿಕೆಯಿಂದ ಕೇಳುತ್ತಾನೆ. ಆದರೆ ದುರಾಭಿ ಮಾನಿಯು ಕೇಳುವುದಿಲ್ಲ.

2ಒಳ್ಳೆಯವರು ತಮ್ಮ ಮಾತುಗಳಿಗೆ ಪ್ರತಿಫಲ ಹೊಂದುವರು. ಕೆಡುಕರು ಯಾವಾಗಲೂ ಕೆಟ್ಟದ್ದನ್ನು ಮಾಡಬಯಸುತ್ತಾರೆ.

3ಎಚ್ಚರಿಕೆಯಿಂದ ಮಾತಾಡುವವನು ತನ್ನ ಜೀವವನ್ನು ಕಾಪಾಡಿಕೊಳ್ಳುವನು. ಯೋಚಿಸದೆ ಮಾತಾಡುವವನು ನಾಶ ವಾಗುವನು.

4ಸೋಮಾರಿಯ ಆಸೆಗಳೆಲ್ಲಾ ವ್ಯರ್ಥ. ಅವನೆಂದಿಗೂ ಅವು ಗಳನ್ನು ಪಡೆಯಲಾರ. ಕಷ್ಟಪಟ್ಟು ದುಡಿಯುವವರು ತಮ್ಮ ಆಸೆಗಳನ್ನು ಈಡೇರಿಸಿಕೊಳ್ಳುವರು.

5ಒಳ್ಳೆಯವರು ಸುಳ್ಳನ್ನು ದ್ವೇಷಿಸುತ್ತಾರೆ. ಕೆಡುಕರು ನಾಚಿಕೆಕರವಾದ ಕೆಲಸ ಮಾಡುವರು.

6ನೀತಿಯು ಯಥಾರ್ಥವಂತನನ್ನು ಕಾಪಾಡುವುದು. ಕೆಡುಕತನವು ಪಾಪವನ್ನು ಪ್ರೀತಿಸುವವನನ್ನು ಸೋಲಿಸುವುದು.

7ಕೆಲವರು ಐಶ್ವರ್ಯವಂತರಂತೆ ನಟಿಸುತ್ತಾರೆ, ಆದರೆ ಅವರಲ್ಲೇನೂ ಇರುವುದಿಲ್ಲ. ಕೆಲವರು ಬಡವರಂತೆ ವರ್ತಿಸುತ್ತಾರೆ. ಆದರೆ ಅವರು ನಿಜವಾಗಿಯೂ ಐಶ್ವರ್ಯವಂತರು.

8ಐಶ್ವರ್ಯವಂತರು ತಮ್ಮ ಜೀವವನ್ನು ಕಾಪಾಡಿಕೊಳ್ಳಲು ಈಡುಕೊಡಬೇಕಾಗುವುದು. ಆದರೆ ಬಡವನಿಗೆ ಅಂಥಾ ಯಾವ ಬೆದರಿಕೆಗಳೂ ಇರುವುದಿಲ್ಲ.

9ಒಳ್ಳೆಯವನು ಪ್ರಕಾಶಮಾನವಾದ ಬೆಳಕಿನಂತಿರುವನು. ಕೆಡುಕನಾದರೊ ನಂದಿಹೋಗುತ್ತಿರುವ ಬೆಳಕಿನಂತಿರುವನು.

10ದುರಾಭಿಮಾನವು ಕೇವಲ ಜಗಳಕ್ಕೆ ಕಾರಣ. ಬುದ್ಧಿವಾದವನ್ನು ಕೇಳುವವರು ವಿವೇಕಿಗಳಾಗಿದ್ದಾರೆ.

11ಮೋಸದಿಂದ ಸಂಪಾದಿಸಿದ ಹಣವು ಕ್ಷಯಿಸಿ ಹೋಗುವುದು. ದುಡಿದು ಸಂಪಾದಿಸಿದ ಹಣ ಹೆಚ್ಚುತ್ತಾ ಹೋಗುವುದು.

12ನಿರೀಕ್ಷೆಯು ನೆರವೇರದಿದ್ದರೆ ಹೃದಯವು ವ್ಯಸನವಾಗಿರುವುದು. ಬಯಸಿದ್ದು ನೆರವೇರಿದರೆ ಆನಂದವು ತುಂಬಿಕೊಳ್ಳುವುದು.

[13]ಬುದ್ಧಿಮಾತನ್ನು ಕೇಳದವನು ತನಗೆ ತೊಂದರೆ
ಯನ್ನು ಬರಮಾಡಿಕೊಳ್ಳುವನು. ಬುದ್ಧಿವಾದವನ್ನು
ಗೌರವಿಸುವವನು ಪ್ರತಿಫಲವನ್ನು ಹೊಂದುವನು.

[14]ಜ್ಞಾನಿಯ ಉಪದೇಶಗಳು ಜೀವದ ಬುಗ್ಗೆಯಾಗಿವೆ;
ಮರಣಕರವಾದ ಬಲೆಗಳಿಗೆ ಸಿಕ್ಕಿಕೊಳ್ಳದಂತೆ ಅವು
ಸಹಾಯ ಮಾಡುತ್ತವೆ.

[15]ಜನರು ಜಾಣನನ್ನು ಗೌರವಿಸುತ್ತಾರೆ. ಆದರೆ ನಂಬಿ
ಕೆಗೆ ಯೋಗ್ಯನಲ್ಲದವನು ತೊಂದರೆಗೆ ಒಳಗಾಗುವನು.

[16]ಜ್ಞಾನಿಯು ವಿವೇಚಿಸಿ ಕಾರ್ಯಮಾಡುವನು;
ಮೂಢನಾದರೋ ತನ್ನ ಕಾರ್ಯಗಳಿಂದಲೇ ತನ್ನ
ಮೂಢತನವನ್ನು ತೋರಿಸಿಕೊಳ್ಳುತ್ತಾನೆ.

[17]ಅಪನಂಬಿಗಸ್ತನಾದ ರಾಯಭಾರಿಯ ಸುತ್ತಲೂ
ಕೇಡುಗಳಿವೆ. ನಂಬಿಗಸ್ತನಾದ ರಾಯಭಾರಿಗೆ ಸಮಾಧಾನ
ವಿರುವುದು.

[18]ಶಿಕ್ಷೆಯನ್ನು ಕಡೆಗಣಿಸುವವನು ಬಡವನಾಗುವನು;
ಅವಮಾನ ಹೊಂದುವನು. ತಿದ್ದುಪಡಿಯನ್ನು ಸ್ವೀಕರಿಸಿ
ಕೊಳ್ಳುವವನು ಗೌರವವನ್ನೂ ಐಶ್ವರ್ಯವನ್ನೂ ಪಡೆದು
ಕೊಳ್ಳುವನು.

[19]ಒಬ್ಬನು ತಾನು ಅಪೇಕ್ಷಿಸಿದ್ದನ್ನು ಪಡೆದುಕೊಂಡರೆ,
ಅದರ ಮೇಲೆ ಅವನಿಗೆ ಬಹಳ ಇಷ್ಟವಿರುವುದು.
ಮೂಢರು ಕೇಡಿಗೆ ವಿಮುಖರಾಗಲು ಅಸಹ್ಯಪಡುತ್ತಾರೆ.

[20]ಜ್ಞಾನಿಗಳೊಂದಿಗೆ ಸ್ನೇಹದಿಂದಿರಿ. ಆಗ ನೀವೂ ಜ್ಞಾನಿ
ಗಳಾಗುವಿರಿ. ಆದರೆ ನೀವು ಮೂಢರನ್ನು ನಿಮ್ಮ
ಸ್ನೇಹಿತರನ್ನಾಗಿ ಆಯ್ದುಕೊಂಡರೆ, ನಿಮಗೆ ತೊಂದರೆ
ಉಂಟಾಗುವುದು.

[21]ಪಾಪಿಗಳು ಹೋದಲ್ಲೆಲ್ಲಾ ಕೇಡು ಅವರನ್ನು ಹಿಂಬಾ
ಲಿಸುವುದು. ಆದರೆ ಒಳ್ಳೆಯವರಿಗೆ ಒಳ್ಳೆಯವುಗಳೇ
ಆಗುತ್ತವೆ.

[22]ಒಳ್ಳೆಯವನಲ್ಲಿ ತನ್ನ ಮಕ್ಕಳಿಗೂ ಮೊಮ್ಮಕ್ಕಳಿಗೂ
ಕೊಡಲು ಐಶ್ವರ್ಯವಿರುವುದು. ಕಟ್ಟಕಡೆಯಲ್ಲಿ, ಕೆಡು
ಕರು ಹೊಂದಿರುವದೆಲ್ಲಾ ಒಳ್ಳೆಯವರ ಪಾಲಾಗುವುದು.

[23]ಬಡವನ ಭೂಮಿಯು ಯಥೇಚ್ಛವಾಗಿ ಫಲಿಸ
ಬಹುದು. ಆದರೆ ಅನ್ಯಾಯವು ಅದನ್ನು ಕೊಚ್ಚಿಕೊಂಡು
ಹೋಗುವುದು.

[24]ಮಕ್ಕಳು ತಪ್ಪು ಮಾಡಿದಾಗ ಶಿಕ್ಷಿಸದ ತಂದೆಯು
ಅವರಿಗೆ ಶತ್ರುವಿನಂತಿದ್ದಾನೆ. ಮಕ್ಕಳು ತಪ್ಪು ಮಾಡಿದಾಗ
ಶಿಕ್ಷಿಸುವ ತಂದೆಯು ಅವರಿಗೆ ಮಿತ್ರನಂತಿದ್ದಾನೆ.

[25]ನೀತಿವಂತರು ತೃಪ್ತಿಯಾಗುವಷ್ಟು ತಿನ್ನುವರು. ಆದರೆ
ಕೆಡುಕನು ಹಸಿವೆಯಿಂದಿರುವನು.

14 ಜ್ಞಾನವೆಂಬಾಕೆಯು ತನ್ನ ಮನೆಯನ್ನು ಕಟ್ಟು
ತ್ತಾಳೆ, ಆದರೆ ಮೂಢಳೆಂಬಾಕೆಯು ತನ್ನ
ಕೈಯಿಂದಲೇ ಅದನ್ನು ಬೀಳಿಸುವಳು.

[2]ಸನ್ಮಾರ್ಗಿಯು ಯೆಹೋವನಲ್ಲಿ ಭಯಭಕ್ತಿಯಿಂದಿ
ರುವನು. ವಕ್ರಮಾರ್ಗಿಯಾದರೊ ಯೆಹೋವನನ್ನು
ಕಡೆಗಣಿಸುವನು.

[3]ಮೂಢನ ಮಾತುಗಳು ಅವನಿಗೇ ತೊಂದರೆಯನ್ನು
ಉಂಟುಮಾಡುತ್ತವೆ. ವಿವೇಕಿಯ ಮಾತುಗಳಾದರೊ
ಅವನನ್ನು ಕಾಪಾಡುತ್ತವೆ.

[4]ಎತ್ತುಗಳಿಲ್ಲದಿದ್ದರೆ ಕೊಟ್ಟಿಗೆ ಬರಿದಾಗಿರುವುದು.
ದೊಡ್ಡ ಸುಗ್ಗಿಪಡೆಯಲು ಎತ್ತಿನ ಶಕ್ತಿ ಜನರಿಗೆ ಅಗತ್ಯ.

[5]ಸತ್ಯಸಾಕ್ಷಿಯು ಸುಳ್ಳು ಹೇಳುವುದಿಲ್ಲ. ಆದರೆ ಸುಳ್ಳು
ಸಾಕ್ಷಿಯು ಸುಳ್ಳನ್ನೇ ಹೇಳುವನು.

[6]ದೇವದೂಷಕನು ಜ್ಞಾನಕ್ಕಾಗಿ ಹುಡುಕಿದರೂ ಅದನ್ನು
ಕಂಡುಕೊಳ್ಳುವುದಿಲ್ಲ. ಆದರೆ ಬುದ್ಧಿವಂತನು ಜ್ಞಾನವನ್ನು
ಸರಾಗವಾಗಿ ಕಂಡುಕೊಳ್ಳುವನು.

[7]ಮೂಢನೊಡನೆ ಸ್ನೇಹ ಬೆಳಸಬೇಡಿ; ನಿಮಗೆ ಉಪ
ದೇಶಿಸಲು ಅವನಲ್ಲೇನೂ ಇಲ್ಲ.

[8]ಜಾಣರು ಜ್ಞಾನಿಗಳಾಗಿದ್ದಾರೆ; ಅವರು ವಿವೇಚಿಸಿ
ಕಾರ್ಯಗಳನ್ನು ಮಾಡುತ್ತಾರೆ, ಮೂಢರು ಬುದ್ಧಿಹೀನ
ರಾಗಿದ್ದಾರೆ; ತಾವು ಮೋಸದಿಂದ ಬದುಕಬಲ್ಲೆವು ಎಂದು
ಅವರು ಯೋಚಿಸಿ ಕೊಂಡಿದ್ದಾರೆ.

[9]ಮೂಢರಿಗೆ ಪ್ರಾಯಶ್ಚಿತ್ತವು ಹಾಸ್ಯಾಸ್ಪದವಾಗಿದೆ;
ನೀತಿವಂತರು ಕ್ಷಮೆಗಾಗಿ ಶ್ರಮಿಸುವರು.

[10]ಅವನವನ ವ್ಯಥೆಯು ಅವನವನಿಗೇ ತಿಳಿದಿದೆ.
ಬೇರೊಬ್ಬರ ಸಂತೋಷದಲ್ಲಿ ಪಾಲುಗಾರರಾಗಲು
ಯಾರಿಗೂ ಸಾಧ್ಯವಿಲ್ಲ.

[11]ಕೆಡುಕನ ಮನೆ ನಾಶಕರ; ಒಳ್ಳೆಯವನ ಮನೆ
ಅಭಿವೃದ್ಧಿಕರ.

[12]ಒಳ್ಳೆಯದೆಂದು ಜನರು ಭಾವಿಸಿಕೊಂಡಿರುವ
ಮಾರ್ಗವೊಂದುಂಟು. ಅದರ ಅಂತ್ಯ ಮರಣವೇ.

[13]ಒಬ್ಬನು ನಗುತ್ತಿರುವಾಗಲೂ ವ್ಯಸನದಿಂದಿರಲು
ಸಾಧ್ಯ. ಅಂತೆಯೇ ಆನಂದವೂ ದುಃಖದಲ್ಲಿ ಅಂತ್ಯ
ವಾಗಬಹುದು.

[14]ಕೆಡುಕರು ತಾವು ಮಾಡುವ ಕೆಟ್ಟಕಾರ್ಯಗಳಿಗೆ
ಸಂಪೂರ್ಣವಾಗಿ ದಂಡನೆ ಅನುಭವಿಸುವರು. ಆದರೆ
ಒಳ್ಳೆಯವರು ತಮ್ಮ ಒಳ್ಳೆಯಕಾರ್ಯಗಳಿಗೆ ಸಂಪೂರ್ಣ
ವಾಗಿ ಪ್ರತಿಫಲ ಪಡೆಯುವರು.

[15]ಮೂಢನು ತಾನು ಕೇಳಿದ್ದನ್ನೆಲ್ಲ ನಂಬುವನು. ಆದರೆ
ಜಾಣನು ಪ್ರತಿಯೊಂದರ ಬಗ್ಗೆ ಎಚ್ಚರಿಕೆಯಿಂದ
ಯೋಚಿಸುವನು.

[16]ಜ್ಞಾನಿಯು ಎಚ್ಚರವಾಗಿದ್ದು ಆಪತ್ತಿನಿಂದ ದೂರ
ವಿರುತ್ತಾನೆ. ಮೂಢನಾದರೊ ಸೊಕ್ಕಿನಿಂದ ಯೋಚಿಸದೆ
ಕಾರ್ಯಗಳನ್ನು ಮಾಡುತ್ತಾನೆ.

[17]ಮುಂಗೋಪಿಯು ಮೂಢಕಾರ್ಯಗಳನ್ನು ಮಾಡು
ವನು. ಸಂಚುಗಾರನನ್ನು ಜನರು ದ್ವೇಷಿಸುವರು.

[18]ದಡ್ಡರಿಗೆ ಮೂಢತನವೇ ಪ್ರತಿಫಲ. ಜಾಣರಾದರೊ
ಜ್ಞಾನವೆಂಬ ಕಿರೀಟವನ್ನು ಹೊಂದುವರು.
[19]ಕೊನೆಯಲ್ಲಿ ಕೆಟ್ಟವರ ಮೇಲೆ ಒಳ್ಳೆಯವರು ಜಯ
ಗಳಿಸುವರು. ಕೆಟ್ಟವರು ಬಲವಂತಕ್ಕೆ ಒಳಗಾಗಿ ಒಳ್ಳೆಯ
ವರ ಸೇವೆಯನ್ನು ಮಾಡಬೇಕಾಗುವುದು.
[20]ಬಡವನು ತನ್ನ ನೆರೆಯವನಿಂದಲೂ ದ್ವೇಷಿಸಲ್ಪಡು
ವನು. ಐಶ್ವರ್ಯವಂತರಿಗಾದರೊ ಅನೇಕ ಮಂದಿ
ಸ್ನೇಹಿತರು.
[21]ನೆರೆಯವರನ್ನು ತಿರಸ್ಕರಿಸುವುದು ತಪ್ಪು. ನೀವು
ಸಂತೋಷದಿಂದ ಇರಬೇಕಾದರೆ ಬಡವರಿಗೆ ದಯೆ
ತೋರಿಸಿ.
[22]ದುರ್ಮಾರ್ಗಿಯು ದಾರಿ ತಪ್ಪುವನು. ಒಳ್ಳೆಯದನ್ನು
ಮಾಡಲು ಪ್ರಯತ್ನಿಸುವವನು ಪ್ರೀತಿಗೂ ಭರವಸೆಗೂ
ಪಾತ್ರನಾಗುವನು.
[23]ಕಷ್ಟಪಟ್ಟು ದುಡಿದರೆ, ಸಮೃದ್ಧಿಯಿರುವುದು. ಕೇವಲ
ಮಾತಾಡಿದರೆ ಬಡತನ ಬರುವುದು.
[24]ಜ್ಞಾನಿಗಳಿಗೆ ದೊರೆಯುವ ಪ್ರತಿಫಲ ಐಶ್ವರ್ಯ.
ಮೂರ್ಖರಿಗೆ ದೊರೆಯುವ ಪ್ರತಿಫಲ ಮೂಢತನ.
[25]ಸತ್ಯ ಸಾಕ್ಷಿಯು ಪ್ರಾಣಗಳನ್ನು ರಕ್ಷಿಸುತ್ತಾನೆ. ಸುಳ್ಳು
ಗಾರನಾದರೊ ದ್ರೋಹಿ.
[26]ಯೆಹೋವನಲ್ಲಿ ಭಯಭಕ್ತಿಯುಳ್ಳವನು ಕ್ಷೇಮ
ವಾಗಿರುವನು; ಅವನ ಮಕ್ಕಳು ಸಹ ಕ್ಷೇಮವಾಗಿರುವರು.
[27]ಯೆಹೋವನಲ್ಲಿರುವ ಭಯಭಕ್ತಿ ಜೀವದ ಬುಗ್ಗೆ.
ಅದು ಮನುಷ್ಯನನ್ನು ಮರಣದ ಬಲೆಯಿಂದ
ಕಾಪಾಡುತ್ತದೆ.
[28]ಅಧಿಕ ಜನಸಂಖ್ಯೆಯು ರಾಜನಿಗೆ ಗೌರವ. ಪ್ರಜೆಗಳೇ
ಇಲ್ಲದಿದ್ದರೆ ರಾಜನಿಗೆ ಬೆಲೆಯೇ ಇಲ್ಲ.
[29]ತಾಳ್ಮೆಯುಳ್ಳವನು ತುಂಬಾ ಜಾಣ. ಮುಂಗೋ
ಪಿಯು ತಾನು ಮೂಢ ಎಂಬುದನ್ನು ತೋರಿಸಿ
ಕೊಳ್ಳುತ್ತಾನೆ.
[30]ಮನಶ್ಶಾಂತಿಯುಳ್ಳವನ ದೇಹವು ಆರೋಗ್ಯದಿಂದಿ
ರುವುದು. ಹೊಟ್ಟೇಕಿಚ್ಚು ದೇಹಕ್ಕೆ ಕಾಯಿಲೆಯನ್ನು ಬರ
ಮಾಡುವುದು.
[31]ಬಡವರನ್ನು ಕುಗ್ಗಿಸುವವನು ತನ್ನ ಸೃಷ್ಟಿಕರ್ತನಿಗೇ
ಅವಮಾನ ಮಾಡುತ್ತಾನೆ. ಬಡವರಿಗೆ ಕರುಣೆ ತೋರುವ
ವನು ತನ್ನ ಸೃಷ್ಟಿಕರ್ತನನ್ನೇ ಸನ್ಮಾನಿಸುತ್ತಾನೆ.
[32]ದುಷ್ಟನು ತನ್ನ ಕೆಡುಕಿನಿಂದಲೇ ಸೋತು ಹೋಗು
ವನು; ನೀತಿವಂತನಾದರೊ ತನ್ನ ನೀತಿಯನ್ನೇ ಆಶ್ರಯಿಸಿ
ಕೊಳ್ಳುವನು.
[33]ಜ್ಞಾನಿಯು ಯಾವಾಗಲೂ ಜ್ಞಾನದ ಕಾರ್ಯಗಳನ್ನು
ಆಲೋಚಿಸುವನು. ಮೂಢನಿಗಾದರೊ ಜ್ಞಾನದ ಬಗ್ಗೆ
ಏನೂ ತಿಳಿಯದು.
[34]ಒಳ್ಳೆತನವು ದೇಶದ ಏಳಿಗೆಗೆ ಕಾರಣ. ಪಾಪವು
ದೇಶಕ್ಕೆ ಅವಮಾನಕರ.
[35]ಬುದ್ಧಿವಂತ ನಾಯಕರನ್ನು ಹೊಂದಿರುವ ರಾಜನು
ಸಂತೋಷವಾಗಿರುವನು. ಅಯೋಗ್ಯನಾದ ಸೇವಕನ
ಮೇಲೆ ರಾಜನು ಕೋಪಗೊಳ್ಳುವನು.

15 ಸಮಾಧಾನದ ಉತ್ತರ ಕೋಪವನ್ನು ಕಡಿಮೆ
ಮಾಡುವುದು; ಒರಟು ಉತ್ತರ ಕೋಪವನ್ನು
ಹೆಚ್ಚಿಸುವುದು.
[2]ಜ್ಞಾನಿಯ ಮಾತನ್ನು ಜನರು ಕೇಳಬಯಸುತ್ತಾರೆ.
ಮೂಢನು ಕೇವಲ ಮೂರ್ಖತನವನ್ನೇ ಮಾತಾಡುವನು.
[3]ಯೆಹೋವನ ದೃಷ್ಟಿಗೆ ಪ್ರತಿಯೊಂದೂ ಕಾಣುತ್ತದೆ.
ಯೆಹೋವನು ಕೆಡುಕರನ್ನೂ ಒಳ್ಳೆಯವರನ್ನೂ ಗಮನಿಸು
ತ್ತಿದ್ದಾನೆ.
[4]ಹಿತನುಡಿಗಳು ಜೀವವುಳ್ಳ ಮರದಂತಿವೆ. ಸುಳ್ಳು
ಮಾತುಗಳು ಮನುಷ್ಯನ ಆತ್ಮವನ್ನು ಜಜ್ಜಿಹಾಕುತ್ತವೆ.
[5]ಮೂಢನು ತಂದೆಯ ಬುದ್ಧಿಮಾತನ್ನು ತಿರಸ್ಕರಿಸು
ವನು. ಬುದ್ಧಿಮಾತನ್ನು ಸ್ವೀಕರಿಸಿಕೊಳ್ಳುವವನು ಜ್ಞಾನಿ
ಯಾಗುತ್ತಾನೆ.
[6]ಒಳ್ಳೆಯವರ ಮನೆಗಳಲ್ಲಿ ಬಹಳ ಐಶ್ವರ್ಯವಿರುತ್ತದೆ.
ಕೆಡುಕರ ಸಂಪಾದನೆಯಾದರೊ ಆಪತ್ತನ್ನು ಬರ
ಮಾಡುತ್ತದೆ.
[7]ಜ್ಞಾನಿಯ ಮಾತುಗಳು ಜ್ಞಾನವನ್ನು ಹರಡುತ್ತವೆ.
ಮೂಢರ ಮಾತುಗಳು ಕೇಳಲು ಯೋಗ್ಯವಲ್ಲ.
[8]ಕೆಡುಕರ ಕಾಣಿಕೆಯನ್ನು ಯೆಹೋವನು ದ್ವೇಷಿಸು
ವನು; ಒಳ್ಳೆಯವರ ಪ್ರಾರ್ಥನೆಯನ್ನು ಸಂತೋಷದಿಂದ
ಕೇಳುವನು.
[9]ದುಷ್ಟರ ಜೀವಿತವು ಯೆಹೋವನಿಗೆ ಅಸಹ್ಯ. ಒಳ್ಳೆಯ
ದನ್ನು ಮಾಡಲಿಚ್ಛಿಸುವವರು ಯೆಹೋವನಿಗೆ ಪ್ರಿಯ.
[10]ನೀತಿಮಾರ್ಗವನ್ನು ತೊರೆದವರಿಗೆ ಮಹಾದಂಡನೆ
ಯಾಗುವುದು; ಬುದ್ಧಿಮಾತನ್ನು ದ್ವೇಷಿಸುವವನು ನಾಶ
ವಾಗುವನು.
[11]ಮೃತ್ಯುಲೋಕದಲ್ಲಿ ನಡೆಯುತ್ತಿರುವುದು ಯೆಹೋ
ವನಿಗೆ ತಿಳಿದಿದೆ. ಜನರ ಹೃದಯಗಳಲ್ಲಿಯೂ ಮನಸ್ಸುಗ
ಳಲ್ಲಿಯೂ ಇರುವ ಆಲೋಚನೆಗಳು ಸಹ ಆತನಿಗೆ
ಗೊತ್ತಿವೆ.
[12]ಮೂಢನು ತನ್ನ ತಪ್ಪನ್ನು ಬೇರೆಯವರಿಂದ ಕೇಳಲು
ಇಷ್ಟಪಡನು. ಮೂಢನು ಉಪದೇಶಕ್ಕಾಗಿ ಜ್ಞಾನಿಗಳ
ಬಳಿಗೆ ಹೋಗುವುದಿಲ್ಲ.
[13]ಸಂತೋಷವಾಗಿರುವವನ ಮುಖದಲ್ಲಿ ಆನಂದ
ಎದ್ದುಕಾಣವುದು. ದುಃಖಗೊಂಡಿರುವವನ ಆತ್ಮದಲ್ಲಿ
ವ್ಯಥೆ ಎದ್ದುಕಾಣುವುದು.

[14]ಜ್ಞಾನಿಯು ಮತ್ತಷ್ಟು ಜ್ಞಾನವನ್ನು ಪಡೆದುಕೊಳ್ಳಲು ಪ್ರಯತ್ನಿಸುವನು. ಮೂಢನು ಮತ್ತಷ್ಟು ಮೂಢತನವನ್ನು ಬಯಸುತ್ತಾನೆ.

[15]ಬಡಜನರ ದಿನಗಳೆಲ್ಲಾ ಕಷ್ಟಕರ. ಸಂತೋಷದ ಹೃದಯದಲ್ಲಿ ಸದಾ ಔತಣ.

[16]ಬಹಳ ಐಶ್ವರ್ಯವನ್ನು ಹೊಂದಿದ್ದು ಸಮಾಧಾನವಿಲ್ಲದೆ ಇರುವುದಕ್ಕಿಂತ ಸ್ವಲ್ಪ ಐಶ್ವರ್ಯವನ್ನುಹೊಂದಿದ್ದು ಯೆಹೋವನಲ್ಲಿ ಭಯಭಕ್ತಿಯಿಂದಿರುವುದೇ ಮೇಲು.

[17]ದ್ವೇಷವಿರುವಲ್ಲಿ ಹೆಚ್ಚಾಗಿ ತಿನ್ನುವುದಕ್ಕಿಂತಲೂ ಪ್ರೀತಿಯಿರುವಲ್ಲಿ ಸ್ವಲ್ಪ ತಿನ್ನುವುದೇ ಉತ್ತಮ.

[18]ಮುಂಗೋಪಿಗಳು ಜಗಳಗಳನ್ನು ಎಬ್ಬಿಸುವರು. ತಾಳ್ಮೆಯುಳ್ಳವನು ಶಾಂತಿ ಸ್ಥಾಪಿಸುವನು.

[19]ಸೋಮಾರಿಗೆ ಎಲ್ಲೆಲ್ಲೂ ತೊಂದರೆ. ನೀತಿವಂತರಿಗೆ ಜೀವನ ಸರಾಗ.

[20]ಜ್ಞಾನಿಯಾದ ಮಗನಿಂದ ತಂದೆಗೆ ಸಂತೋಷ. ಮೂಢ ನಾದರೊ ತನ್ನ ತಾಯಿಯನ್ನು ಕಡೆಗಣಿಸುವನು.

[21]ಮೂಢನಿಗೆ ಮೂಢತನದಲ್ಲಿ ಸಂತೋಷ. ಜ್ಞಾನಿಯು ಎಚ್ಚರಿಕೆಯಿಂದಿದ್ದು ಒಳ್ಳೆಯದನ್ನು ಮಾಡುವನು.

[22]ಆಲೋಚಿಸಿಲ್ಲದ ಯೋಜನೆಗಳು ವಿಫಲವಾಗುತ್ತವೆ. ಆಲೋಚಿಸಿ ಮಾಡಿದ ಯೋಜನೆಗಳು ಯಶಸ್ವಿಯಾಗುತ್ತವೆ.

[23]ಸಮರ್ಪಕವಾದ ಉತ್ತರ ಸಂತೋಷವನ್ನು ಉಂಟು ಮಾಡುವುದು; ಸಮಯೋಚಿತವಾದ ಮಾತು ಸ್ವಾರಸ್ಯಕರ.

[24]ಜ್ಞಾನಿಯ ಕಾರ್ಯಗಳು ಅವನನ್ನು ಯಶಸ್ಸಿಗೆ ನಡೆಸುತ್ತವೆ; ಅವು ಅವನನ್ನು ಮರಣದ ಹಾದಿಯಿಂದ ತಪ್ಪಿಸುತ್ತವೆ.

[25]ಅಹಂಕಾರಿಯ ಆಸ್ತಿಯನ್ನು ಯೆಹೋವನು ನಾಶಗೊಳಿಸುತ್ತಾನೆ; ಆದರೆ ವಿಧವೆಯ ಆಸ್ತಿಯನ್ನು ಕಾಪಾಡುವನು.

[26]ಯೆಹೋವನು ದುರಾಲೋಚನೆಗಳನ್ನು ದ್ವೇಷಿಸುವನು; ಕನಿಕರದ ಮಾತುಗಳಲ್ಲಾದರೊ ಸಂತೋಷಪಡುವನು.

[27]ದುರಾಶೆಪಡುವವನು ತನ್ನ ಕುಟುಂಬಕ್ಕೆ ಆಪತ್ತನ್ನು ಬರಮಾಡಿಕೊಳ್ಳುವನು. ಲಂಚ ತೆಗೆದುಕೊಳ್ಳದವನಿಗೆ ಯಾವ ಸಮಸ್ಯೆಯೂ ಇರುವುದಿಲ್ಲ.

[28]ಒಳ್ಳೆಯವರು ಎಚ್ಚರಿಕೆಯಿಂದ ಯೋಚಿಸಿ ಉತ್ತರ ಕೊಡುವರು. ಕೆಡುಕರಾದರೊ ಯೋಚಿಸದೆ ಮಾತಾಡುವರು; ಆದರಿಂದ ಜನರಿಗೆ ಕೇವಲ ತೊಂದರೆಯಷ್ಟೇ.

[29]ಯೆಹೋವನು ಕೆಡುಕರಿಗೆ ಬಹುದೂರ. ಒಳ್ಳೆಯವರ ಪ್ರಾರ್ಥನೆಯನ್ನಾದರೊ ಆತನು ಯಾವಾಗಲೂ ಕೇಳುತ್ತಾನೆ.

[30]ನಗುಮುಖವು ಜನರನ್ನು ಸಂತೋಷಗೊಳಿಸುವುದು; ಒಳ್ಳೆಯ ಸುದ್ದಿಯಿಂದ ಜನರ ಆರೋಗ್ಯ ಹೆಚ್ಚುವುದು.

[31]ತನ್ನ ತಪ್ಪನ್ನು ಎಚ್ಚರಿಕೆಯಿಂದ ಕೇಳುವವನು ಬಹು ಜ್ಞಾನಿ.

[32]ಕಲಿತುಕೊಳ್ಳಲು ಒಪ್ಪದವನು ತನಗೇ ಕೇಡು ಮಾಡಿಕೊಳ್ಳುತ್ತಾನೆ. ತನ್ನ ತಪ್ಪನ್ನು ಗಮನವಿಟ್ಟು ಕೇಳುವವನು ತಿಳುವಳಿಕೆಯನ್ನು ಪಡೆದುಕೊಳ್ಳುವನು.

[33]ಯೆಹೋವನಲ್ಲಿ ಭಯಭಕ್ತಿಯುಳ್ಳವನು ಜ್ಞಾನಿಯಾಗುತ್ತಿದ್ದಾನೆ. ಸನ್ಮಾನ ಹೊಂದಬೇಕೆನ್ನುವವನು ಮೊದಲು ದೀನನಾಗಿರಬೇಕು.

16 ಜನರು ತಾವು ಹೇಳಬೇಕಾದದ್ದನ್ನು ಆಲೋಚಿಸಿಕೊಂಡರೂ ನಾಲಿಗೆಗೆ ತಕ್ಕ ಮಾತುಗಳನ್ನು ಕೊಡುವವನು ಯೆಹೋವನೇ.

[2]ಜನರು ತಮ್ಮ ಕಾರ್ಯಗಳೆಲ್ಲಾ ಸರಿಯೆಂದು ಆಲೋಚಿಸಿಕೊಂಡರೂ ಅವುಗಳ ಉದ್ದೇಶಕ್ಕನುಸಾರವಾಗಿ ತೀರ್ಪು ಕೊಡುವವನು ಯೆಹೋವನೇ.

[3]ನಿಮ್ಮ ಕಾರ್ಯಭಾರವನ್ನು ಯೆಹೋವನಿಗೆ ವಹಿಸಿರಿ; ಆಗ ನಿಮ್ಮ ಕಾರ್ಯಗಳೆಲ್ಲಾ ಸಫಲವಾಗುವವು.

[4]ಯೆಹೋವನು ಪ್ರತಿಯೊಂದನ್ನು ತನ್ನ ಉದ್ದೇಶಕ್ಕನುಸಾರವಾಗಿ ಮಾಡಿದ್ದಾನೆ. ಆತನು ಕೆಡುಕನನ್ನೂ ನಾಶನದ ದಿನಕ್ಕಾಗಿ ಇಟ್ಟಿದ್ದಾನೆ.

[5] ಗರ್ವಿಷ್ಠರು ಯೆಹೋವನಿಗೆ ಅಸಹ್ಯ. ಆ ಗರ್ವಿಷ್ಠರಿಗೆ ಯೆಹೋವನ ದಂಡನೆ ಖಂಡಿತ.

[6]ಪ್ರೀತಿ ಮತ್ತು ನಂಬಿಗಸ್ತಿಕೆಗಳು ದೋಷಕ್ಕೆ ಪ್ರಾಯಶ್ಚಿತ್ತವಾಗಿವೆ. ಯೆಹೋವನಲ್ಲಿ ಭಯಭಕ್ತಿಯಿಂದಿರಿ, ಆಗ ನೀವು ದುಷ್ಟತನಕ್ಕೆ ದೂರವಾಗುವಿರಿ.

[7]ಯೆಹೋವನ ಚಿತ್ತಕ್ಕನುಸಾರವಾಗಿ ಜೀವಿಸುವವನು ತನ್ನ ವೈರಿಗಳೊಡನೆಯೂ ಸಮಾಧಾನದಿಂದಿರುವನು.

[8]ಅನ್ಯಾಯದಿಂದ ಹೆಚ್ಚು ಸಂಪಾದಿಸುವುದಕ್ಕಿಂತ ನ್ಯಾಯವಾಗಿ ಸ್ವಲ್ಪ ಸಂಪಾದಿಸುವುದೇ ಉತ್ತಮ.

[9]ಒಬ್ಬನು ಅನೇಕ ಯೋಜನೆಗಳನ್ನು ಮಾಡಿಕೊಂಡರೂ ಭವಿಷ್ಯತ್ತನ್ನು ನಿರ್ಧರಿಸುವವನು ಯೆಹೋವನೇ.

[10]ರಾಜನ ಮಾತು ದೇವರಿಂದ ಬಂದ ಸಂದೇಶದಂತಿದೆ. ಅವನ ತೀರ್ಮಾನ ಯಾವಾಗಲೂ ನ್ಯಾಯವಾಗಿರಬೇಕು.

[11]ಎಲ್ಲಾ ನ್ಯಾಯವಾದ ಅಳತೆಮಾಪಕಗಳು ಮತ್ತು ತಕ್ಕಡಿಗಳು ಯೆಹೋವನಿಗೆ ಇಷ್ಟ. ನ್ಯಾಯವಾದ ಒಪ್ಪಂದವು ಆತನಿಗೆ ಇಷ್ಟ.

[12]ರಾಜನು ಕೆಟ್ಟದ್ದನ್ನು ಸಹಿಸಲಾರನು; ಯಾಕೆಂದರೆ ಒಳ್ಳೆಯದರಿಂದಲೇ ಅವನ ರಾಜ್ಯಕ್ಕೆ ಬಲ.

[13]ರಾಜರಿಗೆ ಸತ್ಯವನ್ನು ಕೇಳಲು ಇಷ್ಟ, ಸುಳ್ಳಾಡದ ಜನರೂ ಇಷ್ಟ.

[14]ರಾಜನು ಕೋಪದಿಂದಿರುವಾಗ ಯಾರನ್ನಾದರೂ ಕೊಂದರೂ ಕೊಲ್ಲಬಹುದು. ಆದರೆ ಜ್ಞಾನಿಯು ಆತನ ಕೋಪವನ್ನು ಶಮನಗೊಳಿಸಬಲ್ಲನು.
[15]ರಾಜನು ಸಂತೋಷದಿಂದಿರುವಾಗ ಎಲ್ಲರ ಜೀವನವು ಉತ್ತಮವಾಗಿರುವುದು. ರಾಜನು ನಿನ್ನನ್ನು ಮೆಚ್ಚಿಕೊಂಡರೆ, ಅದು ನಿನ್ನ ಪಾಲಿಗೆ ಮೋಡದಿಂದ ಸುರಿಯುವ ಮುಂಗಾರು ಮಳೆಯಂತಿರುವುದು.

[16]ಜ್ಞಾನ ಸಂಪಾದನೆಯು ಬಂಗಾರ ಸಂಪಾದನೆಗಿಂತಲೂ ಶ್ರೇಷ್ಠ. ವಿವೇಕ ಸಂಪಾದನೆಯು ಬೆಳ್ಳಿ ಸಂಪಾದನೆಗಿಂತಲೂ ಉತ್ತಮ.

[17]ನೀತಿವಂತರ ಜೀವಿತವು ದುಷ್ಟತನಕ್ಕೆ ದೂರವಾಗಿರುವುದು. ತನ್ನ ಜೀವಿತದ ಬಗ್ಗೆ ಎಚ್ಚರಿಕೆಯುಳ್ಳವನು ತನ್ನ ಪ್ರಾಣವನ್ನು ಕಾಪಾಡಿಕೊಳ್ಳುವನು.
[18]ಅಹಂಕಾರಿಯು ನಾಶನದ ಅಪಾಯದಲ್ಲಿದ್ದಾನೆ. ದುರಾಭಿಮಾನಿಯು ಸೋಲಿನ ಅಪಾಯದಲ್ಲಿದ್ದಾನೆ.
[19]ಗರ್ವಿಷ್ಠರೊಡನೆ ಐಶ್ವರ್ಯವನ್ನು ಹಂಚಿಕೊಳ್ಳುವದಕ್ಕಿಂತ ದೀನರಾಗಿದ್ದು ಬಡಜನರೊಡನೆ ವಾಸಿಸುವುದೇ ಉತ್ತಮ.

[20]ಉಪದೇಶವನ್ನು ಗಮನವಿಟ್ಟು ಕೇಳುವವನು ಅದರ ಲಾಭ ಹೊಂದುವನು; ಯೆಹೋವನಲ್ಲಿ ಭರವಸೆ ಇಡುವವನು ಆಶೀರ್ವಾದ ಹೊಂದುವನು.
[21]ಜ್ಞಾನಿಯನ್ನು ಅವನ ಜ್ಞಾನದಿಂದಲೇ ಜನರು ಗುರುತಿಸುವರು. ಎಚ್ಚರಿಕೆಯಿಂದ ಮಾತಾಡುವವನು ಒಡಂಬಡಿಸುವನು.

[22]ಜ್ಞಾನವು ಜ್ಞಾನಿಗಳಿಗೆ ನಿಜಜೀವವನ್ನು ಕೊಡುತ್ತದೆ. ಆದರೆ ಮೂಢರು ತಮ್ಮ ಮೂಢತನದಿಂದಲೇ ದಂಡಿಸಲ್ಪಡುವರು.
[23]ಜ್ಞಾನಿಯ ಮನಸ್ಸು ಅವನ ಬಾಯಿಗೆ ಮಾರ್ಗದರ್ಶನ. ಅವನ ಮಾತುಗಳು ಒಳ್ಳೆಯದಾಗಿವೆ; ಕೇಳಲು ಯೋಗ್ಯವಾಗಿವೆ.

[24]ಸವಿನುಡಿಗಳು ಜೇನಿನಂತಿವೆ. ಅವು ಸ್ವೀಕಾರಕ್ಕೆ ಸುಲಭ; ಆರೋಗ್ಯಕ್ಕೆ ಉಪಯುಕ್ತ.
[25]ಮನುಷ್ಯದೃಷ್ಟಿಗೆ ಸರಳವಾಗಿ ತೋರುವ ಒಂದು ಮಾರ್ಗವಿದೆ; ಅದರ ಅಂತ್ಯವು ಮರಣ.
[26]ಕೆಲಸಗಾರನನ್ನು ಅವನ ಹೊಟ್ಟೆಯೇ ದುಡಿಮೆಯಲ್ಲಿ ತೊಡಗಿಸುತ್ತದೆ. ಅವನ ಹಸಿವೆ ಊಟಕ್ಕಾಗಿ ಅವನನ್ನು ದುಡಿಸುತ್ತದೆ.
[27]ಅಯೋಗ್ಯನು ಕೆಟ್ಟಕಾರ್ಯಗಳನ್ನು ಆಲೋಚಿಸಿಕೊಳ್ಳುವನು. ಅವನ ಮಾತುಗಳು ಬೆಂಕಿಯಂತೆ ನಾಶಕರ.
[28]ಕೆಡುಕರು ಜಗಳ ಎಬ್ಬಿಸುವರು; ಗಾಳಿಸುದ್ದಿಯನ್ನು ಹಬ್ಬಿಸುವವನು ಆಪ್ತಸ್ನೇಹಿತರಲ್ಲಿ ಒಡಕು ಉಂಟುಮಾಡುವನು.
[29]ಹಿಂಸೆಗಾರನು ತನ್ನ ಸ್ನೇಹಿತರನ್ನೇ ಮೋಸಗೊಳಿಸಿ ನಾಶನಕ್ಕೆ ನಡೆಸುವನು.
[30]ಕಣ್ಣುಮಿಟುಕಿಸುವವನು ಕುತಂತ್ರ ಮಾಡುತ್ತಿರುವನು. ಮುಗುಳ್ನಗೆ ಬೀರುವವನು ಕೆಟ್ಟಕಾರ್ಯವನ್ನು ಪೂರೈಸಿರುವನು.
[31]ಒಳ್ಳೆಯವರಿಗೆ ಅವರ ನರೆಗೂದಲೇ ವೈಭವದ ಕಿರೀಟ.

[32]ಶೂರನಾಗಿರುವುದಕ್ಕಿಂತ ತಾಳ್ಮೆಯಿಂದಿರುವುದೇ ಶ್ರೇಷ್ಠ; ಪಟ್ಟಣವನ್ನು ವಶಪಡಿಸಿಕೊಳ್ಳುವುದಕ್ಕಿಂತ ನಿಮ್ಮ ಕೋಪವನ್ನು ಸ್ವಾಧೀನದಲ್ಲಿಟ್ಟುಕೊಳ್ಳುವುದೇ ಉತ್ತಮ.
[33]ಜನರು ಚೀಟುಹಾಕಿ ನಿರ್ಧಾರ ಮಾಡಿದರೂ ಆ ನಿರ್ಧಾರಗಳು ಬರುವುದು ದೇವರಿಂದಲೇ.

17 ಜಗಳದ ಮನೆಯಲ್ಲಿ ಮೃಷ್ಟಾನ್ನ ತಿನ್ನುವುದಕ್ಕಿಂತಲೂ ಸಮಾಧಾನದ ಮನೆಯಲ್ಲಿ ಒಣ ರೊಟ್ಟಿಯನ್ನು ತಿನ್ನುವುದೇ ಮೇಲು.
[2]ಜ್ಞಾನಿಯಾದ ಸೇವಕನು ತನ್ನ ಯಜಮಾನನ ಅಯೋಗ್ಯ ಮಗನನ್ನೇ ತನ್ನ ಹತೋಟಿಯಲ್ಲಿಟ್ಟುಕೊಳ್ಳುವನು; ಅವನ ಸಹೋದರರೊಂದಿಗೂ ಆಸ್ತಿಯಲ್ಲಿ ಪಾಲು ಹೊಂದುವನು.

[3]ಬೆಳ್ಳಿಬಂಗಾರಗಳನ್ನು ಬೆಂಕಿಗೆ ಹಾಕಿ ಶುದ್ಧಮಾಡುವರು. ಆದರೆ ಮನುಷ್ಯರ ಹೃದಯಗಳನ್ನು ಶುದ್ಧಮಾಡುವವನು ಯೆಹೋವನೇ.
[4]ಕೆಟ್ಟಮಾತುಗಳಿಗೆ ಕಿವಿಗೊಡುವವನು ಕೆಡುಕನಿಗೆ ಸಮಾನ. ಚಾಡಿಗೆ ಕಿವಿಗೊಡುವವನು ಸುಳ್ಳುಗಾರನಿಗೆ ಸಮಾನ.
[5]ಬಡವನನ್ನು ಗೇಲಿಮಾಡಿದರೆ ಅವನನ್ನು ನಿರ್ಮಿಸಿದ ದೇವರಿಗೇ ಅವಮಾನ ಮಾಡಿದಂತಾಗುವುದು. ಬೇರೊಬ್ಬನ ದುರಾವಸ್ಥೆಯಲ್ಲಿ ಸಂತೋಷ ಪಡುವವರಿಗೆ ದಂಡನೆಯು ಖಂಡಿತ.

[6]ಮೊಮ್ಮಕ್ಕಳು ವೃದ್ಧರಿಗೆ ಸಂತೋಷ. ಮಕ್ಕಳಿಗೆ ತಮ್ಮ ತಂದೆತಾಯಿಗಳ ಬಗ್ಗೆ ಹೆಮ್ಮೆ.
[7]ವಾಕ್ಚಾತುರ್ಯವು ಮೂಢತನಕ್ಕೆ ವಿರುದ್ಧ; ಗಣ್ಯನು ಹೇಳುವ ಸುಳ್ಳು ಇನ್ನೂ ಎಷ್ಟೋ ವಿರುದ್ಧ.
[8]ಲಂಚವು ಅದೃಷ್ಟ ಎಂದು ಭಾವಿಸಿಕೊಳ್ಳುವವರಿಗೆ, ಅವರು ಹೋದಲ್ಲೆಲ್ಲಾ ಅದೇ ಕಾರ್ಯಸಾಧಕದಂತೆ ಕಾಣುತ್ತದೆ.

[9]ನಿನಗೆ ತಪ್ಪುಮಾಡಿದವನನ್ನು ನೀನು ಕ್ಷಮಿಸಿದರೆ ನೀವು ಸ್ನೇಹಿತರಾಗುವಿರಿ. ಆದರೆ ನೀನು ಆ ವಿಷಯವನ್ನು (ಬೇರೆಯವರಿಗೆ) ಮತ್ತೆ ಹೇಳಿದರೆ ನಿಮ್ಮ ಗೆಳೆತನವು ಒಡೆದು ಹೋಗುವುದು.
[10]ಮೂಢನಿಗೆ ಮನವರಿಕೆ ಮಾಡಲು ನೂರು ಏಟುಗಳು ಬೇಕಾದರೂ ಜ್ಞಾನಿಗೆ ಒಂದೇ ಗದರಿಕೆಯು ಸಾಕು.

[11]ದುಷ್ಟನಿಗೆ ದೇವರ ವಿರುದ್ಧ ದಂಗೆ ಏಳುವುದಕ್ಕೆ ಇಷ್ಟ. ಕೊನೆಯಲ್ಲಿ ದೇವರು ತನ್ನ ದೂತನನ್ನು ಕಳುಹಿಸಿ ಅವನನ್ನು ದಂಡಿಸುವನು.

[12]ಮೂಢಕಾರ್ಯಗಳಲ್ಲಿ ನಿರತನಾಗಿರುವ ಮೂಢನನ್ನು ಭೇಟಿಯಾಗುವುದಕ್ಕಿಂತ ತನ್ನ ಮರಿಗಳನ್ನು ಕಳೆದುಕೊಂಡು ಕೋಪದಿಂದಿರುವ ತಾಯಿಕರಡಿಗೆ ಎದುರಾಗುವುದೇ ಮೇಲು.

[13]ನಿನಗೆ ಉಪಕಾರ ಮಾಡುವವರಿಗೆ ಅಪಕಾರ ಮಾಡಬೇಡ. ಇಲ್ಲವಾದರೆ ನಿನ್ನ ಜೀವಮಾನವೆಲ್ಲಾ ಕಷ್ಟಪಡುವೆ.

[14]ವಾದವು ಜಲಾಶಯದ ಕಟ್ಟೆಯಲ್ಲಿ ಮಾಡುವ ತೂತಿಗೆ ಸಮಾನ. ಅದು ಹೆಚ್ಚೆಚ್ಚು ದೊಡ್ಡದಾಗುವುದಕ್ಕಿಂತ ಮೊದಲೇ ನಿಲ್ಲಿಸು.

[15]ನಿರಪರಾಧಿಗಾಗುವ ದಂಡನೆಯೂ ಅಪರಾಧಿಗಾಗುವ ಬಿಡುಗಡೆಯೂ ಯೆಹೋವನಿಗೆ ಅಸಹ್ಯ.

[16]ಮೂಢನಲ್ಲಿ ಹಣವಿದ್ದರೂ ಪ್ರಯೋಜನವಿಲ್ಲ. ಯಾಕೆಂದರೆ ಜ್ಞಾನವನ್ನು ಪಡೆದುಕೊಳ್ಳುವುದಕ್ಕೆ ಅವನ ಹಣ ನಿಷ್ಪ್ರಯೋಜಕ.

[17]ಸ್ನೇಹಿತನು ಯಾವಾಗಲೂ ಪ್ರೀತಿಸುವನು. ಕಷ್ಟದ ಸಮಯಗಳಲ್ಲಿ ಸಹೋದರನು ಸಹಾಯಮಾಡುವನು.

[18]ಮೂಢನು ಬೇರೊಬ್ಬನ ಸಾಲಕ್ಕೆ ಜಾಮೀನುಗಾರನಾಗುವನು.

[19]ವಾದದಲ್ಲಿ ಸಂತೋಷಿಸುವವನು ಪಾಪದಲ್ಲಿಯೂ ಸಂತೋಷಿಸುವನು. ಜಂಬಕೊಚ್ಚಿಕೊಳ್ಳುವುದು ಕೇಡನ್ನು ಕರೆಯುವುದಕ್ಕೆ ಸಮಾನ.

[20]ಕೆಡುಕನಿಗೆ ಲಾಭವಿಲ್ಲ. ಸುಳ್ಳುಗಾರನಿಗೆ ತೊಂದರೆಯೇ ಗತಿ.

[21]ಮೂಢಮಗನನ್ನು ಪಡೆದಿರುವ ತಂದೆಗೆ ಬಹು ವ್ಯಥೆ. ಅವನ ತಂದೆಗೆ ಸಂತೋಷವಿಲ್ಲ.

[22]ಸಂತೋಷವು ಒಳ್ಳೆಯ ಔಷಧಿಯಂತಿದೆ. ಆದರೆ ದುಃಖವು ಕಾಯಿಲೆಯಂತಿದೆ.

[23]ದುಷ್ಟನು ನ್ಯಾಯ ದೊರೆಯದಂತೆ ಮಾಡಲು ಗುಟ್ಟಾಗಿ ಲಂಚ ತೆಗೆದುಕೊಳ್ಳುವನು.

[24]ಬುದ್ಧಿವಂತನು ಜ್ಞಾನದ ಮೇಲೆ ಮನಸ್ಸಿಡುತ್ತಾನೆ. ಆದರೆ ಮೂಢನು ಬಹುದೂರದ ಸ್ಥಳಗಳ ಬಗ್ಗೆ ಕನಸು ಕಾಣುತ್ತಲೇ ಇರುವನು.

[25]ಮೂಢಮಗನಿಂದ ತಂದೆಗೆ ದುಃಖ; ಹೆತ್ತತಾಯಿಗೆ ವ್ಯಥೆ.

[26]ನಿರಪರಾಧಿಯನ್ನು ಶಿಕ್ಷಿಸುವುದು ತಪ್ಪು. ನ್ಯಾಯವಂತರಾದ ನಾಯಕರಿಗೆ ಹೊಡೆಯುವುದು ತಪ್ಪು.

[27]ಜ್ಞಾನಿಯು ಎಚ್ಚರಿಕೆಯಿಂದ ಮಾತಾಡುವನು. ಜ್ಞಾನಿಯು ಬೇಗನೆ ಕೋಪಗೊಳ್ಳುವುದಿಲ್ಲ.

[28]ಮೌನವಾಗಿದ್ದರೆ ಮೂಢನು ಸಹ ಜ್ಞಾನಿಯಂತೆ ಕಾಣುವನು; ಮಾತಾಡದಿದ್ದರೆ ವಿವೇಕಿಯಂತೆ ಕಾಣುವನು.

18 ಸ್ನೇಹಭಾವವಿಲ್ಲದವನು ಮಾಡುವುದೆಲ್ಲ ಸ್ವಾರ್ಥತೆಯಿಂದಲೇ. ಪ್ರತಿಯೊಂದು ಒಳ್ಳೆಯದರ ವಿರುದ್ಧವಾಗಿ ಅವನು ವಾದಿಸುತ್ತಾನೆ.

[2]ಮೂಢನಿಗೆ ಅರ್ಥಮಾಡಿಕೊಳ್ಳಲು ಇಷ್ಟವಿಲ್ಲ. ಅವನು ತನ್ನ ಆಲೋಚನೆಗಳನ್ನೇ ಹೇಳಬಯಸುತ್ತಾನೆ.

[3]ನೀನು ಕೇಡುಮಾಡಿದರೆ ಜನರು ನಿನ್ನನ್ನು ಇಷ್ಟಪಡುವುದಿಲ್ಲ; ನಾಚಿಕೆಕರವಾದದ್ದನ್ನು ಮಾಡಿದರೆ ನಿನ್ನನ್ನು ಪರಿಹಾಸ್ಯ ಮಾಡುವರು.

[4]ಬಾಯಿಮಾತುಗಳು ಆಳವಾದ ನೀರುಗಳಂತಿರಲು ಸಾಧ್ಯ; ಆದರೆ ಜ್ಞಾನದ ಮೂಲವು ನುಗ್ಗಿಬರುವ ತೊರೆಯಂತಿದೆ.

[5]ಅಪರಾಧಿಗೆ ಪಕ್ಷಪಾತ ಮಾಡುವುದು ಸರಿಯಲ್ಲ; ನಿರಪರಾಧಿಗೆ ಅನ್ಯಾಯ ಮಾಡುವುದು ಸರಿಯಲ್ಲ.

[6]ಮೂಢನು ವಾದಕ್ಕೆ ಇಳಿಯುತ್ತಾನೆ; ಅವನ ಮಾತುಗಳು ಜಗಳವನ್ನು ಎಬ್ಬಿಸಿ, ಏಟಿಗಾಗಿ ಕೇಳಿಕೊಳ್ಳುತ್ತವೆ.

[7]ಮೂಢನು ಮಾತಿನಲ್ಲಿ ತನ್ನನ್ನೇ ನಾಶಪಡಿಸಿಕೊಳ್ಳುವನು. ಅವನ ಮಾತುಗಳೇ ಅವನಿಗೆ ಬಲೆಯಾಗುತ್ತವೆ.

[8]ಜನರಿಗೆ ಹರಟೆಮಾತನ್ನು ಕೇಳಲು ಇಷ್ಟ. ಹರಟೆಮಾತುಗಳು ರುಚಿಕರವಾದ ಆಹಾರದಂತಿವೆ.

[9]ಸೋಮಾರಿಯು ನಾಶಮಾಡುವ ವ್ಯಕ್ತಿಯಂತಿದ್ದಾನೆ.

[10]ಯೆಹೋವನ ಹೆಸರು ಬಲವಾದ ಗೋಪುರದಂತಿದೆ. ಒಳ್ಳೆಯವರು ಅದರೊಳಗೆ ಓಡಿಹೋಗಿ ಸುರಕ್ಷಿತವಾಗಿರುವರು.

[11]ಐಶ್ವರ್ಯವು ತಮ್ಮನ್ನು ಬಲವಾದ ಕೋಟೆಯಂತೆ ಕಾಪಾಡುತ್ತದೆ ಎಂಬುದು ಐಶ್ವರ್ಯವಂತರ ಭಾವನೆ.

[12]ಗರ್ವಿಯು ಬೇಗನೆ ಹಾಳಾಗುವನು; ದೀನನಾದರೋ ಸನ್ಮಾನವನ್ನು ಹೊಂದುವನು.

[13]ಗಮನವಿಟ್ಟು ಕೇಳದೆ ಉತ್ತರಿಸುವವನು ಮೂಢನೇ ಸರಿ; ಅವನು ನಾಚಿಕೆಗೆ ಒಳಗಾಗುವನು.

[14]ಅಸ್ವಸ್ಥನನ್ನು ಅವನ ಮನಸ್ಸು ಜೀವಂತವಾಗಿಡಬಲ್ಲದು. ಆದರೆ ಮುರಿದ ಆತ್ಮವನ್ನು ಯಾರು ಸಹಿಸಿಕೊಳ್ಳಬಲ್ಲರು?

[15]ಜ್ಞಾನಿಗೆ ಹೆಚ್ಚು ಕಲಿತುಕೊಳ್ಳುವುದಕ್ಕೆ ಇಷ್ಟ; ಆದ್ದರಿಂದ ಅವನು ಗಮನವಿಟ್ಟು ಕೇಳುವನು.

[16]ಪ್ರಮುಖನನ್ನು ಭೇಟಿಯಾಗಬೇಕಿದ್ದರೆ, ಅವನಿಗೆ ಒಂದು ಉಡುಗೊರೆಯನ್ನು ಕೊಡು. ಆಗ ನೀನು ಅವನನ್ನು ಸುಲಭವಾಗಿ ಭೇಟಿಯಾಗಬಹುದು.

[17]ಮೊದಲು ತನ್ನ ವಾದವನ್ನು ಮಂಡಿಸುವವನು ಯಾವಾಗಲೂ ನೀತಿವಂತನಂತೆ ಕಾಣುತ್ತಾನೆ.

[18]ಬಲಿಷ್ಠರಾದ ಇಬ್ಬರು ವಾದಮಾಡುತ್ತಿರುವಾಗ
ನಿರ್ಧಾರಕ್ಕಾಗಿ ಚೀಟುಹಾಕಿದರೆ ಅವರ ಜಗಳ ಶಮನ
ವಾಗುತ್ತದೆ.
[19]ಅವಮಾನಿತನಾದ ಸಹೋದರನನ್ನು ಗೆದ್ದುಕೊಳ್ಳು
ವುದು ಕೋಟೆಯುಳ್ಳ ಪಟ್ಟಣವನ್ನು ಗೆದ್ದುಕೊಳ್ಳುವುದ
ಕ್ಕಿಂತಲೂ ಕಷ್ಟ. ಜಗಳಗಳು ಅರಮನೆಯ ಬಾಗಿಲಿನಂತೆ
ಜನರನ್ನು ಪ್ರತ್ಯೇಕ ಗೊಳಿಸುತ್ತದೆ.
[20]ಒಬ್ಬನು ತಾನು ಹೇಳಿದ ಒಳ್ಳೆಯದಕ್ಕೇ ಆಗಲೀ
ಕೆಟ್ಟದ್ದಕ್ಕೇ ಆಗಲೀ ಪ್ರತಿಫಲವನ್ನು ಪಡೆಯಲೇಬೇಕು.
[21]ಒಬ್ಬನ ಮಾತುಗಳು ಜೀವವನ್ನು ಉಳಿಸಬಲ್ಲವು
ಅಥವಾ ಮರಣವನ್ನು ತರಬಲ್ಲವು. ಜನರು ತಮ್ಮ ಮಾತಿನ
ಫಲವನ್ನು ಅನುಭವಿಸಲೇಬೇಕು.
[22]ಹೆಂಡತಿಯುಳ್ಳವನು ಸಂತೋಷವನ್ನೇ ಪಡೆದು
ಕೊಂಡಿದ್ದಾನೆ; ಯೆಹೋವನು ಅವನ ಬಗ್ಗೆ ಸಂತೋಷ
ಪಡುವನು.
[23]ಬಡವನು ವಿನಯದಿಂದ ಬೇಡಿಕೊಳ್ಳುವನು;
ಐಶ್ವರ್ಯವಂತನು ಬಿರುಸಾಗಿ ಉತ್ತರಕೊಡುವನು.
[24]ಒಬ್ಬನಿಗೆ ಬಹಳ ಮಂದಿ ಸ್ನೇಹಿತರಿದ್ದರೆ,ಅದು ಅವ
ನನ್ನು ನಾಶಮಾಡಬಹುದು. ಆದರೆ ನಿಜವಾದ ಸ್ನೇಹಿತನು
ಸಹೋದರನಿಗಿಂತಲೂ ನಂಬಿಗಸ್ತನಾಗಿರುವನು.

19 ಸುಳ್ಳುಹೇಳುವ ಮತ್ತು ಮೋಸಮಾಡುವ
ಮೂಢನಾಗಿರುವುದಕ್ಕಿಂತ, ಬಡವನಾಗಿಯೂ
ಯಥಾರ್ಥ ನಾಗಿಯೂ ಇರುವುದು ಲೇಸು.
[2]ಯಾವುದೇ ಕಾರ್ಯದಲ್ಲಿ ಉತ್ಸುಕತೆಯೊಂದೇ
ಸಾಲದು, ತಿಳುವಳಿಕೆಯೂ ಬೇಕು. ಯಾವುದೇ ಕಾರ್ಯ
ದಲ್ಲಿ ದುಡುಕದಿರಿ; ಇಲ್ಲವಾದರೆ, ತಪ್ಪಾದೀತು!
[3]ಮೂಢನ ಮೂಢತನವು ಅವನ ಜೀವನವನ್ನೇ ನಾಶ
ಪಡಿಸುತ್ತದೆ. ಆದರೆ ಅವನು ದೂಷಿಸುವುದು
ಯೆಹೋವನನ್ನೇ.
[4]ಐಶ್ವರ್ಯವಂತನಿಗೆ ಅನೇಕ ಸ್ನೇಹಿತರಿರುವರು;
ಬಡವ ನಿಗೆ ಇದ್ದ ಸ್ನೇಹಿತರೂ ಬಿಟ್ಟುಹೋಗುವರು.
[5]ಮತ್ತೊಬ್ಬನ ಮೇಲೆ ಸುಳ್ಳುಹೇಳುವವನು ದಂಡಿಸಲ್ಪ
ಡುವನು. ಸುಳ್ಳುಸಾಕ್ಷಿಗೆ ಸುರಕ್ಷತೆಯಿಲ್ಲ.
[6]ಉದಾರಿಯ ಸ್ನೇಹಿತರಾಗಿರಲು ಅನೇಕರಿಗೆ ಆಸೆ.
ದಾನ ಶೂರನಿಗೆ ಸ್ನೇಹಿತರಾಗಿರಲು ಎಲ್ಲರಿಗೂ ಆಸೆ.
[7]ಬಡವನಿಗೆ ಅವನ ಕುಟುಂಬವು ವಿರುದ್ಧವಾಗುವುದು;
ಅವನ ಸ್ನೇಹಿತರೆಲ್ಲಾ ಮುಖತಿರುವಿಕೊಂಡು ಅವನಿಗೆ
ದೂರವಾಗುವರು. ಆ ಬಡವನು ಸಹಾಯಕ್ಕಾಗಿ ಬೇಡಿ
ಕೊಂಡರೂ ಅವನ ಸಮೀಪಕ್ಕೆ ಯಾರೂ
ಹೋಗುವುದಿಲ್ಲ.
[8]ತನ್ನನ್ನು ಪ್ರೀತಿಸುವ ಪ್ರತಿಯೊಬ್ಬನು ಜ್ಞಾನಿಯಾಗಲು
ಪ್ರಯಾಸಪಡುವನು; ಅಭಿವೃದ್ಧಿಗಾಗಿ ಇಷ್ಟಪಡುವವನು
ತಿಳುವಳಿಕೆಯನ್ನು ಹೊಂದಿಕೊಳ್ಳಲು ಪ್ರಯತ್ನಿಸುವನು.
[9]ಸುಳ್ಳುಸಾಕ್ಷಿಯು ದಂಡಿಸಲ್ಪಪಡುವನು; ಸುಳ್ಳು
ಗಾರನು ನಾಶವಾಗುವನು.
[10]ಮೂಢನಿಗೆ ಐಶ್ವರ್ಯವು ಸೂಕ್ತವಲ್ಲ; ರಾಜಕುಮಾ
ರರ ಮೇಲೆ ದೊರೆತನ ಮಾಡುವುದು ಗುಲಾಮನಿಗೆ
ಮತ್ತಷ್ಟು ಸೂಕ್ತವಲ್ಲ.
[11]ಜ್ಞಾನಿಗೆ ಅವನ ಜ್ಞಾನವೇ ಸನ್ಮಾನವನ್ನು ತರುತ್ತದೆ.
ತನಗೆ ತಪ್ಪು ಮಾಡಿದವರನ್ನು ಕ್ಷಮಿಸುವುದು ಅವನ
ಸದ್ಗುಣವಾಗಿದೆ.
[12]ರಾಜನ ಕೋಪವು ಸಿಂಹ ಘರ್ಜನೆಯಂತಿರುತ್ತದೆ.
ರಾಜನಿಗೆ ನಿನ್ನ ಮೇಲಿರುವ ಸಂತೋಷವು ತುಂತುರು
ಮಳೆಯಂತಿರುತ್ತದೆ.
[13]ಮೂಢನಾದ ಮಗನು ತಂದೆಯನ್ನೇ ಹಾಳುಮಾಡು
ವನು; ವಾದಿಸುವ ಹೆಂಡತಿಯು ಸೋರುವ ಮೇಲ್ಛಾವಣಿ
ಯಂತಿದ್ದಾಳೆ.
[14]ಮಕ್ಕಳು ತಂದೆಯಿಂದ ಮನೆಗಳನ್ನು ಮತ್ತು ಹಣ
ವನ್ನು ಸ್ವಾಸ್ತ್ಯವಾಗಿ ಪಡೆದುಕೊಳ್ಳುವರು. ಬುದ್ಧಿವಂತಳಾದ
ಹೆಂಡತಿಯಾದರೋ ಯೆಹೋವನಿಂದ ಬಂದ ಉಡು
ಗೊರೆ.
[15]ಸೋಮಾರಿಗೆ ಗಾಢವಾದ ನಿದ್ರೆ. ಮೈಗಳ್ಳನಿಗೆ ಹಸಿವೆ.
[16]ಆಜ್ಞೆಗಳಿಗೆ ವಿಧೇಯನಾಗುವವನು ತನ್ನ ಪ್ರಾಣವನ್ನು
ಸಂರಕ್ಷಿಸಿಕೊಳ್ಳುವನು. ಆದರೆ ತನ್ನ (ನಡತೆಯ ಬಗ್ಗೆ)
ನಿರ್ಲಕ್ಷ್ಯದಿಂದಿರುವವನು ಸಾವಿಗೀಡಾಗುವನು.
[17]ಬಡಜನರಿಗೆ ಉದಾರವಾಗಿ ಕೊಡುವವನು
ಯೆಹೋವನಿಗೆ ಸಾಲಕೊಡುತ್ತಾನೆ; ಅವನ (ಕರುಣೆಯ)
ಕಾರ್ಯಕ್ಕೆ ಯೆಹೋವನು ಅವನಿಗೆ ಮರುಪಾವತಿ
ಮಾಡುವನು.
[18]ನಿನ್ನ ಮಗನು ತನ್ನ ಮಾರ್ಗಗಳನ್ನು ಸರಿಪಡಿಸಿ ಕೊಳ್ಳು
ತ್ತಾನೆ ಎಂಬ ನಿರೀಕ್ಷೆ ಇನ್ನೂ ಇರುವಾಗಲೇ ಅವನನ್ನು
ಶಿಸ್ತುಗೊಳಿಸು. ಅವನನ್ನು ಶಿಸ್ತುಗೊಳಿಸದಿದ್ದರೆ ಮರಣಕ್ಕೆ
ಈಡು ಮಾಡಿದಂತಾಗುವುದು.
[19]ಮುಂಗೋಪಿಯು ತನ್ನ ಕೋಪಕ್ಕೆ ದಂಡಕೊಡಲೇ
ಬೇಕು. ಕೊಡಬೇಕಾದ ದಂಡದಿಂದ ತಪ್ಪಿಸಿದರೆ, ಅವನು
ಅದೇ ಕಾರ್ಯಗಳನ್ನು ಮತ್ತೆ ಮಾಡುವನು.
[20]ಉಪದೇಶಕ್ಕೆ ಕಿವಿಗೊಟ್ಟು ಸರಿಪಡಿಸಿಕೋ. ಆಗ
ನೀನು ಜ್ಞಾನಿಯಾಗುವೆ.
[21]ಜನರು ಅನೇಕ ಆಲೋಚನೆಗಳನ್ನು ಮಾಡಿ
ಕೊಂಡರೂ ಯೆಹೋವನ ಇಚ್ಫೆಯೇ ನೆರವೇರುವುದು.
[22]ದುರಾಶೆಯುಳ್ಳವನಿಗೆ ಅವನ ದುರಾಶೆಯೇ ಅವ
ಮಾನಕರ. ಸುಳ್ಳು ಹೇಳುವುದಕ್ಕಿಂತ ಬಡವನಾಗಿರುವುದೇ
ಮೇಲು.
[23]ಯೆಹೋವನಲ್ಲಿರುವ ಭಯಭಕ್ತಿಯು ಒಳ್ಳೆಯ
ಜೀವನಕ್ಕೆ ನಡೆಸುತ್ತದೆ. ಅದು ಅವನಿಗೆ ತೃಪ್ತಿಯನ್ನೂ
ಕೊಡುವುದು; ಕೇಡಿನಿಂದಲೂ ತಪ್ಪಿಸಿ ಕಾಪಾಡುವುದು.

[24]ಕೆಲವರಿಗೆ ಊಟಮಾಡುವುದಕ್ಕೂ ಸೋಮಾರಿತನ. ಅವರು ಕೈಯನ್ನು ತಟ್ಟೆಗೆ ಹಾಕಿದರೂ ಊಟವನ್ನು ಬಾಯಿಗೆ ಹಾಕಿಕೊಳ್ಳುವುದಿಲ್ಲ.

[25]ದುರಾಭಿಮಾನಿಯನ್ನು ದಂಡಿಸಿದರೆ ದಡ್ಡನು ಪಾಠ ವನ್ನು ಕಲಿತುಕೊಳ್ಳಬಹುದು. ಜ್ಞಾನಿಯನ್ನು ತಿದ್ದಿ ಸರಿ ಪಡಿಸಿದರೆ ಅವನು ಮತ್ತಷ್ಟು ಜ್ಞಾನವನ್ನು ಗಳಿಸಿ ಕೊಳ್ಳುವನು.

[26]ತಂದೆಗೆ ಹೊಡೆಯುವವನೂ ತಾಯಿಯನ್ನು ಓಡಿಸು ವವನೂ ತನಗೇ ನಾಚಿಕೆಯನ್ನು ಮತ್ತು ಅವಮಾನವನ್ನು ತಂದು ಕೊಳ್ಳುವನು.

[27]ನೀನು ಬುದ್ಧಿವಾದವನ್ನು ಕೇಳದಿದ್ದರೆ, ನಿನ್ನ ತಪ್ಪುಗ ಳಲ್ಲಿಯೇ ಮುಂದುವರಿಯುವೆ.

[28]ದುಷ್ಟಸಾಕ್ಷಿಯು ನ್ಯಾಯವನ್ನು ಪರಿಹಾಸ್ಯ ಮಾಡು ವನು; ಕೆಡುಕರ ಮಾತುಗಳು ಅನ್ಯಾಯವನ್ನು ಹರಡುತ್ತವೆ.

[29]ದುರಾಭಿಮಾನಿಯು ಶಿಕ್ಷೆಗೆ ಗುರಿಯಾಗಿ ದಂಡಿಸಲ್ಪ ಡುವನು; ಮೂಢನು ತನಗಾಗಿ ಕಾದಿರುವ ದಂಡನೆ ಯನ್ನು ಅನುಭವಿಸುವನು.

20 ದ್ರಾಕ್ಷಾರಸವು ಪರಿಹಾಸ್ಯಕ್ಕೂ ಮದ್ಯವು ಕೂಗಾ ಟಕ್ಕೂ ನಡೆಸುತ್ತವೆ. ಅಮಲೇರಿಸಿಕೊಳ್ಳುವುದು ಮೂರ್ಖತನ.

[2]ರಾಜನ ಕೋಪವು ಸಿಂಹದ ಘರ್ಜನೆಯಂತಿದೆ. ರಾಜನನ್ನು ಕೋಪಗೊಳಿಸಿದರೆ ಪ್ರಾಣಕ್ಕೆ ಹಾನಿ.

[3]ವಾದದಿಂದ ದೂರವಿರುವವನು ಸನ್ಮಾನಕ್ಕೆ ಯೋಗ್ಯನು. ಮೂಢರೆಲ್ಲರು ಜಗಳಕ್ಕೇ ಆತುರ ಪಡುವರು.

[4]ಸೋಮಾರಿಯು ಬಿತ್ತನೆಕಾಲದಲ್ಲಿ ಬೀಜ ಬಿತ್ತುವು ದಿಲ್ಲ; ಸುಗ್ಗಿಕಾಲದಲ್ಲಿ ಅವನಿಗೆ ಬೆಳೆಯೂ ಇರುವುದಿಲ್ಲ.

[5]ಬೇರೊಬ್ಬನ ಆಲೋಚನೆಗಳನ್ನು ನೋಡಲು ಸಾಧ್ಯ ವಿಲ್ಲ; ಅವು ಆಳವಾದ ನೀರಿನಂತಿವೆ; ಆದರೆ ಅವುಗಳನ್ನು ಜ್ಞಾನಿಯು ಅರ್ಥಮಾಡಿಕೊಳ್ಳಬಲ್ಲನು.

[6]ಅನೇಕರು ತಾವು ನಂಬಿಗಸ್ತರೆಂದು ಹೇಳಿಕೊಳ್ಳು ತ್ತಾರೆ. ಆದರೆ ನಿಜವಾಗಿಯೂ ನಂಬಿಗಸ್ತನಾಗಿರುವ ಒಬ್ಬನನ್ನು ಕಂಡುಕೊಳ್ಳುವುದು ಬಹು ಕಷ್ಟ.

[7]ಒಳ್ಳೆಯವನು ಒಳ್ಳೆಯ ರೀತಿಯಲ್ಲಿ ಜೀವಿಸುತ್ತಾನೆ; ಅವನ ಮಕ್ಕಳಿಗೆ ಆಶೀರ್ವಾದವಾಗುವುದು.

[8]ರಾಜನು ನ್ಯಾಯತೀರ್ಪು ಮಾಡುವಾಗ ತನ್ನ ಕಣ್ಣುಗ ಳಿಂದ ದುಷ್ಟತನವನ್ನು ಶೋಧಿಸುವನು.

[9]ಯಾವನಾದರೂ, ‘‘ನನ್ನ ಹೃದಯವನ್ನು ಶುದ್ಧೀಕರಿ ಸಿರುವೆ. ನಾನು ಪಾಪರಹಿತನಾಗಿರುವೆ’’ ಎಂದು ಹೇಳಲು ಸಾಧ್ಯವೇ?

[10]ಮೋಸದ ತಕ್ಕಡಿಗಳೂ ಮೋಸದ ಅಳತೆ ಮಾಪಕ ಗಳೂ ಯೆಹೋವನಿಗೆ ಅಸಹ್ಯ.

[11]ಬಾಲಕನೊಬ್ಬನು ಒಳ್ಳೆಯವನೊ ಕೆಟ್ಟವನೊ ಎಂಬುದು ಅವನ ನಡತೆಯಿಂದಲೇ ತೋರಿಬರುವುದು.

[12]ನಮಗೆ ನೋಡಲು ಕಣ್ಣುಗಳಿವೆ, ಕೇಳಲು ಕಿವಿಗಳಿವೆ. ಅವುಗಳನ್ನು ನಮಗೋಸ್ಕರ ಉಂಟುಮಾಡಿದವನು ಯೆಹೋವನೇ.

[13]ನಿದ್ರಾನಿರತನಾಗಿರಬೇಡ, ಬಡವನಾಗುವೆ. ನಿನ್ನ ಸಮಯವನ್ನು ದುಡಿಯಲು ಉಪಯೋಗಿಸಿಕೊಂಡರೆ ನಿನಗೆ ಊಟಕ್ಕೆ ಬೇಕಾದಷ್ಟಿರುವುದು.

[14]ನಿನ್ನ ವಸ್ತುವನ್ನು ಖರೀದಿಮಾಡುವವನು, ‘‘ಇದು ಚೆನ್ನಾಗಿಲ್ಲ! ಬೆಲೆಯೂ ಜಾಸ್ತಿ!’’ ಎಂದು ಹೇಳುವನು. ಬಳಿಕ ತನ್ನ (ಚೌಕಾಸಿಯ ಬಗ್ಗೆ) ಬೇರೆಯವರ ಮುಂದೆ ಹೊಗಳಿ ಕೊಳ್ಳುವನು.

[15]ಬಂಗಾರಕ್ಕಿಂತಲೂ ಮಾಣಿಕ್ಯದ ಸಮೃದ್ಧಿಗಿಂತಲೂ ಜ್ಞಾನದ ಮಾತುಗಳನ್ನಾಡುವ ತುಟಿಗಳು ಅಮೂಲ್ಯ ವಾಗಿವೆ.

[16]ಬೇರೊಬ್ಬನ ಸಾಲಕ್ಕೆ ನೀನು ಜಾಮೀನಾದರೆ, ನಿನ್ನ ಅಂಗಿಯನ್ನು ಕಳೆದುಕೊಳ್ಳುವೆ.

[17]ಅನ್ಯಾಯವಾಗಿ ಗಳಿಸಿದ ಆಹಾರವು ಆರಂಭದಲ್ಲಿ ರುಚಿಕರವಾಗಿದ್ದರೂ ಕೊನೆಯಲ್ಲಿ ಬಾಯಿತುಂಬ ಮರಳಿ ನಂತಿರುವುದು.

[18]ಒಳ್ಳೆಯ ಸಮಾಲೋಚನೆಗಳೊಡನೆ ಮಾಡಿದ ಯೋಜನೆಗಳು ಯಶಸ್ವಿಯಾಗುತ್ತವೆ. ನೀನು ಯುದ್ಧ ವನ್ನು ಆರಂಭಿಸುವುದಾಗಿದ್ದರೆ, ಮಾರ್ಗದರ್ಶನಕ್ಕಾಗಿ ಒಳ್ಳೆಯವರನ್ನು ಹುಡುಕು.

[19]ಬೇರೆಯವರ ಬಗ್ಗೆ ಸುಳ್ಳುಸುದ್ದಿ ಹಬ್ಬಿಸುವವನನ್ನು ನಂಬಬೇಡ; ಅತಿಯಾಗಿ ಮಾತಾಡುವವನ ಸ್ನೇಹಿತನೂ ಆಗಬೇಡ.

[20]ತಂದೆಯನ್ನಾಗಲೀ ತಾಯಿಯನ್ನಾಗಲೀ ದೂಷಿಸುವ ವನ ಜೀವಿತವು ಕತ್ತಲೆಯಲ್ಲಿ ಆರಿಹೋದ ದೀಪದಂತೆ ಕೊನೆಗೊಳ್ಳುವುದು.

[21]ಸುಲಭವಾಗಿ ಬಾಚಿಕೊಂಡ ಸ್ವಾಸ್ತ್ಯವು ಕೊನೆಯಲ್ಲಿ ಆಶೀರ್ವಾದದಾಯಕವಾಗಿರುವುದಿಲ್ಲ.

[22]‘‘ಕೇಡಿಗೆ ಪ್ರತಿಯಾಗಿ ಕೇಡನ್ನು ಮಾಡುತ್ತೇನೆ’’ ಎಂದು ಹೇಳಬೇಡ. ಯೆಹೋವನಿಗಾಗಿ ಕಾದು ಕೊಂಡಿರು! ಆತನು ನಿನ್ನನ್ನು ಜಯಶಾಲಿಯನ್ನಾಗಿ ಮಾಡುವನು.

[23]ಯೆಹೋವನಿಗೆ ಅನ್ಯಾಯದ ಅಳತೆ ಮಾಪಕವು ಅಸಹ್ಯ; ಮೋಸದ ತಕ್ಕಡಿಗಳು ಅಪರಾಧ.

[24]ಭವಿಷ್ಯತ್ತನ್ನು ನಿರ್ಣಯಿಸುವವನು ಯೆಹೋವನೇ ಆಗಿರುವಾಗ, ತನ್ನ ಭವಿಷ್ಯತ್ತನ್ನು ಅರ್ಥಮಾಡಿಕೊಳ್ಳಲು ಯಾರಿಗೆ ಸಾಧ್ಯ?

25ನೀನು ದೇವರಿಗೆ ಹರಕೆ ಮಾಡುವ ಮೊದಲೇ
ಎಚ್ಚರಿಕೆಯಿಂದ ಯೋಚಿಸು. ಹರಕೆ ಮಾಡಿದ ಮೇಲೆ
ಹರಕೆ ಮಾಡ ಬಾರದಾಗಿತ್ತು ಎಂದು ಹೇಳಬೇಡ.
26ಜ್ಞಾನಿಯಾದ ರಾಜನಿಗೆ ಕೆಡುಕರು ಯಾರೆಂಬುದು
ಗೊತ್ತಾಗುವುದು; ಅವನು ಅವರನ್ನು ದಂಡಿಸುವನು.
27ಮನುಷ್ಯನ ಆತ್ಮ ಯೆಹೋವನ ದೀಪವಾಗಿದೆ; ಅದು
ಅಂತರಂಗವನ್ನೆಲ್ಲಾ ಶೋಧಿಸುತ್ತದೆ.
28ರಾಜನು ನಂಬಿಗಸ್ತನಾಗಿಯೂ ಪ್ರೀತಿಯುಳ್ಳವ
ನಾಗಿಯೂ ಇದ್ದರೆ, ಅವನ ಅಧಿಕಾರ ಉಳಿದು
ಕೊಳ್ಳುವುದು; ಅವನ ಆಡಳಿತ ಮುಂದುವರಿಯುವುದು.
29ಯುವಕನ ಶಕ್ತಿ ಪ್ರಶಂಸೆಗೆ ಯೋಗ್ಯ. ವೃದ್ಧನ ನರೆ
ಕೂದಲು ಗೌರವಕ್ಕೆ ಪಾತ್ರ.
30ದಂಡನೆಯು ತಪ್ಪನ್ನು ನಿಲ್ಲಿಸುತ್ತದೆ; ನೋವು ವ್ಯಕ್ತಿ
ಯನ್ನು ಬದಲಾಯಿಸುತ್ತದೆ.

21 ಯೆಹೋವನು ರಾಜನ ಮನಸ್ಸನ್ನು ನೀರಿನ
ಕಾಲುವೆಯಂತೆ ಹತೋಟಿಯಲ್ಲಿಡುವನು.
ಆತನು ತನ್ನ ಇಷ್ಟಾನುಸಾರ ಅದಕ್ಕೆ ಮಾರ್ಗದರ್ಶನ
ನೀಡುವನು.
2ತನ್ನ ನಡತೆ ಸರಿಯೆಂದು ಒಬ್ಬನು ಭಾವಿಸಿಕೊಳ್ಳ
ಬಹುದು; ಆದರೆ ಉದ್ದೇಶಗಳಿಗನುಸಾರವಾಗಿ ತೀರ್ಪು
ನೀಡುವವನು ಯೆಹೋವನೇ.
3ಸರಿಯಾದ ಮತ್ತು ನ್ಯಾಯವಾದ ಕಾರ್ಯಗಳನ್ನು
ಮಾಡಿ. ಯೆಹೋವನು ಅವುಗಳನ್ನು ಯಜ್ಞಗಳಿಗಿಂತಲೂ
ಹೆಚ್ಚಾಗಿ ಪ್ರೀತಿಸುವನು.
4ಗರ್ವದ ಕಣ್ಣುಗಳು ಮತ್ತು ದುರಾಭಿಮಾನದ
ಹೃದಯ ಪಾಪಮಯವಾಗಿದ್ದು ದುಷ್ಟನಿಗೆ ಮಾರ್ಗ
ದರ್ಶನ ನೀಡುತ್ತವೆ.
5ಕಷ್ಟಪಟ್ಟು ದುಡಿಯುವವನ ಆಲೋಚನೆಗಳು
ಲಾಭಕ್ಕೆ ನಡೆಸುತ್ತವೆ. ಆದರೆ ಆತುರತೆಯಲ್ಲೇ ಇರು
ವವನು ಬಡವ ನಾಗುವನು.
6ನೀನು ಮೋಸದಿಂದ ಐಶ್ವರ್ಯವಂತನಾದರೆ, ಆ
ಐಶ್ವರ್ಯವು ಬಹುಬೇಗನೆ ಇಲ್ಲವಾಗುತ್ತದೆ. ನಿನ್ನ
ಐಶ್ವರ್ಯವು ನಿನ್ನನ್ನು ಮರಣಕ್ಕೆ ನಡೆಸುತ್ತದೆ.
7ಕೆಡುಕರು ಕೊಡುವ ಹಿಂಸೆಯು ಅವರನ್ನೇ ನಾಶ
ಮಾಡುತ್ತದೆ; ಯಾಕೆಂದರೆ ಒಳ್ಳೆಯದನ್ನು ಮಾಡಲು
ಅವರು ಒಪ್ಪುವುದೇ ಇಲ್ಲ.
8ಕೆಟ್ಟವರು ಬೇರೆಯವರನ್ನು ಮೋಸಗೊಳಿಸುವುದಕ್ಕೇ
ಪ್ರಯತ್ನಿಸುವರು. ಒಳ್ಳೆಯವರಾದರೊ ಯಥಾರ್ಥ
ವಂತರೂ ನ್ಯಾಯವಂತರೂ ಆಗಿದ್ದಾರೆ.
9ವಾದಿಸುವ ಹೆಂಡತಿಯ ಜೊತೆಯಲ್ಲಿ ಮನೆಯೊಳಗೆ
ವಾಸಿಸುವುದಕ್ಕಿಂತ ಮನೆಯ ಮೇಲ್ಛಾವಣಿಗೆಯ ಮೂಲೆ
ಯಲ್ಲಿ ವಾಸಿಸುವುದೇ ಮೇಲು.
10ಕೆಡುಕರು ಕೇಡುಮಾಡುವುದಕ್ಕೇ ಇಷ್ಟಪಡುವರು;
ಅವರು ತಮ್ಮ ಸುತ್ತಮುತ್ತಲಿರುವ ಜನರಿಗೆ ಕರುಣೆ
ತೋರುವುದಿಲ್ಲ.
11ದುರಾಭಿಮಾನಿಯು ದಂಡಿಸಲ್ಪಟ್ಟರೆ ದಡ್ಡನು ಜ್ಞಾನಿ
ಯಾಗುವನು. ಜ್ಞಾನಿಗೆ ಉಪದೇಶಿಸಿದರೆ ಅವನು ಜ್ಞಾನ
ವನ್ನು ಗಳಿಸಿಕೊಳ್ಳುವನು.
12ದೇವರು ನೀತಿಸ್ವರೂಪನು. ಆತನು ದುಷ್ಟರ ದುಷ್ಕೃತ್ಯ
ಗಳನ್ನು ಬಲ್ಲವನಾಗಿದ್ದು ಅವರನ್ನು ದಂಡಿಸುವನು.
13ಬಡವರಿಗೆ ಸಹಾಯಮಾಡದವನು ಕೊರತೆಯಲ್ಲಿ
ರುವಾಗ ಯಾರೂ ಅವನಿಗೆ ಸಹಾಯ ಮಾಡುವುದಿಲ್ಲ.

14ನಿನ್ನ ಮೇಲೆ ಕೋಪಗೊಂಡಿರುವವನಿಗೆ ಒಂದು
ಉಡುಗೊರೆಯನ್ನು ಗುಟ್ಟಾಗಿ ಕೊಡು. ಗುಟ್ಟಾಗಿ ಕೊಟ್ಟ
ಉಡುಗೊರೆಯು ಮಹಾ ಕೋಪವನ್ನೂ ಅಡಗಿಸ
ಬಲ್ಲದು.
15ನ್ಯಾಯವಾದ ತೀರ್ಪು ಒಳ್ಳೆಯವರಿಗೆ ಸಂತೋಷ;
ಕೆಡುಕರಿಗೆ ಬಹುಭಯ.
16ಜ್ಞಾನದ ಮಾರ್ಗವನ್ನು ತೊರೆದವನು ನಾಶನದ
ಕಡೆಗೆ ಹೋಗುತ್ತಿರುವನು.

17ಸುಖವನ್ನು ಪ್ರೀತಿಸುವವನು ಬಡವನಾಗುವನು.
ದ್ರಾಕ್ಷಾರಸವನ್ನೂ ತೈಲವನ್ನೂ ಪ್ರೀತಿಸುವವನು ಐಶ್ವರ್ಯ
ವಂತನಾಗಲಾರನು.
18ಒಳ್ಳೆಯವರ ಬದಲಾಗಿ ಕೆಡುಕರು ಸಂಕಟಪಡು
ವರು. ನೀತಿವಂತರ ಬದಲಾಗಿ ದ್ರೋಹಿಗಳು ಸಂಕಟ
ಪಡುವರು.

19ಮುಂಗೋಪಿಯೂ ವಾದಿಸುವವಳೂ ಆಗಿರುವ
ಹೆಂಡತಿಯೊಡನೆ ಜೀವಿಸುವುದಕ್ಕಿಂತ ಮರಳುಗಾಡಿನಲ್ಲಿ
ಜೀವಿಸುವುದೇ ಮೇಲು.
20ಜ್ಞಾನಿಯ ಮನೆಯಲ್ಲಿ ಬೆಲೆಬಾಳುವ ಭಂಡಾರಗಳೂ
ಪರಿಮಳ ದ್ರವ್ಯಗಳೂ ಇರುತ್ತವೆ. ಮೂಢನಾದರೋ ತನ್ನ
ಲ್ಲಿರುವ ಪ್ರತಿಯೊಂದನ್ನೂ ಬೇಗನೆ ಹಾಳುಮಾಡಿ
ಕೊಳ್ಳುವನು.
21ನ್ಯಾಯವನ್ನು ಮತ್ತು ಕರುಣೆಯನ್ನು ಹುಡುಕುವ
ವನಿಗೆ ಒಳ್ಳೆಯ ಜೀವಿತವೂ ನ್ಯಾಯವೂ ಸನ್ಮಾನವೂ
ದೊರೆ ಯುವುದು.
22ಜ್ಞಾನಿಯು ಯುದ್ಧವೀರರಿಂದ ತುಂಬಿರುವ ಪಟ್ಟ
ಣದ ಮೇಲೆ ಆಕ್ರಮಣಮಾಡಿ ಅವರ ಆಶ್ರಯ ಕೋಟೆ
ಯನ್ನು ನಾಶಮಾಡಬಲ್ಲನು.
23ಎಚ್ಚರಿಕೆಯಿಂದ ಮಾತಾಡುವವನು ತೊಂದರೆ
ಯಿಂದ ಪಾರಾಗುವನು.
24ಗರ್ವಿಷ್ಠನೂ ದುರಾಭಿಮಾನಿಯೂ ಆಗಿರುವವನಿಗೆ
ಗೇಲಿಗಾರನೆಂದು ಹೆಸರು. ಅವನ ನಡತೆಯು ಗರ್ವದ
ಮದದಿಂದ ಕೂಡಿರುತ್ತದೆ.

[25]ಸೋಮಾರಿಯ ಆಸೆ ಅವನನ್ನು ಉಪವಾಸದಿಂದ ಸಾಯಿಸುವುದು, ಯಾಕೆಂದರೆ ಅವನು ದುಡಿಯುವುದಿಲ್ಲ.

[26]ದುರಾಶೆಯುಳ್ಳವನು ಹೆಚ್ಚುಹೆಚ್ಚು ಅಪೇಕ್ಷಿಸುತ್ತಲೇ ಇರುವನು, ಆದರೆ ನೀತಿವಂತನು ಉದಾರವಾಗಿ ಕೊಡುವನು.

[27]ಕೆಡುಕನ ಯಜ್ಞಗಳು ಯೆಹೋವನಿಗೆ ಅಸಹ್ಯ. ಯಾಕೆಂದರೆ ಅವು ದುರುದ್ದೇಶದಿಂದ ಕೂಡಿವೆ.

[28]ಸುಳ್ಳುಸಾಕ್ಷಿಯು ನಾಶವಾಗುವನು. ಆದರೆ ಎಚ್ಚರಿಕೆಯಿಂದ ಕೇಳುವವನು ಮಾತಾಡುತ್ತಲೇ ಇರುವನು.

[29]ದುಷ್ಟರು ನಾಚಿಕೆಯಿಲ್ಲದೆ ವರ್ತಿಸುವರು; ಆದರೆ ಒಳ್ಳೆಯವನು ತನ್ನ ಮಾರ್ಗಗಳ ಬಗ್ಗೆ ಎಚ್ಚರಿಕೆಯಿಂದ ಯೋಚಿಸುವನು.

[30]ಯೆಹೋವನೇ ವಿರೋಧವಾಗಿದ್ದರೆ, ಜಯಪ್ರದವಾಗ ಬಲ್ಲ ಯೋಜನೆಯನ್ನು ಮಾಡುವಂಥ ಜ್ಞಾನ ಯಾರಿಗೂ ಇಲ್ಲ.

[31]ಯುದ್ಧಕ್ಕಾಗಿ ಕುದುರೆಗಳನ್ನು ಸಿದ್ಧಪಡಿಸುತ್ತಾರೆ; ಆದರೆ ಜಯದ ನಿರ್ಧಾರ ಯೆಹೋವನಿಂದಲೇ.

22 ಬಹು ಧನಕ್ಕಿಂತಲೂ ಒಳ್ಳೆಯ ಹೆಸರೇ ಉತ್ತಮ. ಬೆಳ್ಳಿ ಬಂಗಾರಗಳಿಗಿಂತಲೂ ಸನ್ಮಾನಿತರಾಗಿರುವುದೇ ಅಮೂಲ್ಯ.

[2]ಐಶ್ವರ್ಯವಂತರಿಗೂ ಬಡವರಿಗೂ ಯಾವ ವ್ಯತ್ಯಾಸವಿಲ್ಲ. ಯಾಕೆಂದರೆ ಎಲ್ಲರನ್ನು ನಿರ್ಮಿಸಿದಾತನು ಯೆಹೋವನೇ.

[3]ಜ್ಞಾನಿಗಳು ಕೇಡನ್ನು ಕಂಡು ದೂರವಾಗುತ್ತಾರೆ. ಮೂಢರಾದರೋ ನೇರವಾಗಿ ಹೋಗಿ ಆಪತ್ತಿಗೀಡಾಗುವರು.

[4]ಯೆಹೋವನಲ್ಲಿ ಭಯಭಕ್ತಿಯುಳ್ಳವನಾಗಿದ್ದು ದೀನತೆಯಿಂದಿರು; ಆಗ ನೀನು ಐಶ್ವರ್ಯವನ್ನು ಸನ್ಮಾನವನ್ನು ಮತ್ತು ನಿಜಜೀವವನ್ನು ಹೊಂದಿಕೊಳ್ಳುವೆ.

[5]ಕೆಡುಕರು ಅನೇಕ ಆಪತ್ತುಗಳಿಗೆ ಸಿಕ್ಕಿಕೊಂಡಿದ್ದಾರೆ. ಆದರೆ ಎಚ್ಚರಿಕೆಯುಳ್ಳವನು ಆ ಆಪತ್ತುಗಳಿಂದ ದೂರವಿರುವನು.

[6]ಮಗನಿಗೆ ಬಾಲ್ಯದಲ್ಲಿಯೇ ಒಳ್ಳೆಯ ಮಾರ್ಗವನ್ನು ಉಪದೇಶಿಸು. ಅವನು ಬೆಳೆದು ದೊಡ್ಡವನಾದಾಗ ಅದೇ ರೀತಿಯಲ್ಲಿ ಜೀವಿಸುವನು.

[7]ಬಡವರು ಐಶ್ವರ್ಯವಂತರಿಗೆ ಗುಲಾಮರಾಗಿದ್ದಾರೆ. ಸಾಲ ತೆಗೆದುಕೊಳ್ಳುವವನು ಸಾಲಕೊಡುವವನಿಗೆ ಸೇವಕನಾಗಿದ್ದಾನೆ.

[8]ಕೇಡನ್ನು ಬಿತ್ತುವವನು ಕೇಡನ್ನು ಕೊಯ್ಯುವನು. ಅವನ ದುಷ್ಟಶಕ್ತಿಯು ನಾಶವಾಗುವುದು.

[9]ಉದಾರಿಯು ತನ್ನ ಆಹಾರವನ್ನು ಬಡವರೊಂದಿಗೆ ಹಂಚಿ ಕೊಳ್ಳುವುದರಿಂದ ಆಶೀರ್ವಾದ ಹೊಂದುವನು.

[10]ದುರಾಭಿಮಾನಿಯನ್ನು ಬಲವಂತವಾಗಿ ಹೊರಗಟ್ಟಿ, ಆಗ ಜಗಳವಾಗಲೀ ವಾದಗಳಾಗಲೀ ಅವಮಾನಗಳಾಗಲೀ ಇರುವುದಿಲ್ಲ.

[11]ನೀನು ಶುದ್ಧಹೃದಯವನ್ನೂ ಸವಿಮಾತುಗಳನ್ನೂ ಪ್ರೀತಿಸಿ ದರೆ ರಾಜನು ನಿನಗೆ ಸ್ನೇಹಿತನಾಗುವನು.

[12]ಯೆಹೋವನು ಜ್ಞಾನಿಗಳ ಮೇಲೆ ಲಕ್ಷ್ಯವಿಟ್ಟು ಕಾಪಾಡುವನು; ದುಷ್ಟರ ಮಾತುಗಳನ್ನಾದರೊ ನಾಶಪಡಿಸುವನು.

[13]“ನಾನು ಕೆಲಸಕ್ಕೆ ಹೋಗಲಾರೆ. ಹೊರಗಡೆ ಸಿಂಹವಿದೆ. ಅದು ನನ್ನನ್ನು ಕೊಲ್ಲುತ್ತದೆ” ಎನ್ನುತ್ತಾನೆ ಸೋಮಾರಿ.

[14]ಕಾಮುಕಿಯ ಬಾಯಿ ಆಳವಾದ ಗುಂಡಿಯಂತಿದೆ. ಯೆಹೋವನಿಂದ ಶಪಿಸಲ್ಪಟ್ಟವರು ಆ ಗುಂಡಿಯೊಳಗೆ ಬೀಳುವರು.

[15]ಮಕ್ಕಳು ಮೂಢಕಾರ್ಯಗಳನ್ನು ಮಾಡುವರು. ನೀವು ಅವರನ್ನು ಶಿಕ್ಷಿಸಿದರೆ, ಅವುಗಳನ್ನು ಮಾಡಬಾರದೆಂದು ಅವರಿಗೆ ಗೊತ್ತಾಗುವುದು.

[16]ಐಶ್ವರ್ಯವಂತನಾಗಲು ಬಡವರನ್ನು ಹಿಂಸಿಸುವವರಿಗೂ ಐಶ್ವರ್ಯವಂತರಿಗೆ ಉಡುಗೊರೆಗಳನ್ನು ಕೊಡುವವರಿಗೂ ಕೊರತೆಯೇ ಗತಿ.

## ಮೂವತ್ತು ಜ್ಞಾನೋಕ್ತಿಗಳು

[17]ನನ್ನ ಉಪದೇಶಗಳಿಗೆ ಕಿವಿಗೊಡು. ಜ್ಞಾನಿಗಳ ಉಪ
ದೇಶವನ್ನೇ ನಾನು ನಿನಗೆ ಉಪದೇಶಿಸುವೆನು. ಈ ಉಪ
ದೇಶಗಳಿಂದ ಕಲಿತುಕೊ. [18]ನೀನು ಈ ಉಪದೇಶಗಳನ್ನು
ಜ್ಞಾಪಕದಲ್ಲಿಟ್ಟುಕೊಂಡರೆ ನಿನಗೆ ಒಳ್ಳೆಯದಾಗುವುದು.
ನೀನು ಈ ಉಪದೇಶಗಳನ್ನು ಹೇಳಬಲ್ಲವನಾದರೆ ನಿನಗೆ
ಅನುಕೂಲವಾಗುವುದು. [19]ಆ ಜ್ಞಾನೋಕ್ತಿಗಳನ್ನು
ನಾನೀಗ ಉಪದೇಶಿಸುವೆನು, ನೀನು ಯೆಹೋವನಲ್ಲಿ
ಭರವಸೆ ಇಡಬೇಕೆಂಬುದೇ ನನ್ನ ಅಪೇಕ್ಷೆ.

[20]ನಾನು ನಿನಗೋಸ್ಕರ ಮೂವತ್ತು ನುಡಿಗಳನ್ನು ಬರೆದಿರುವೆ. ಇವು ಬುದ್ಧಿವಾದದ ಮತ್ತು ವಿವೇಕದ ನುಡಿಗಳಾಗಿವೆ.

[21]ಈ ನುಡಿಗಳು ನಿನಗೆ ಸತ್ಯವನ್ನೂ ಮುಖ್ಯವಾದವುಗಳನ್ನೂ ಉಪದೇಶಿಸುತ್ತವೆ. ಆಗ ನೀನು ನಿನ್ನನ್ನು ಕಳುಹಿಸಿದವನಿಗೆ ಒಳ್ಳೆಯ ಉತ್ತರಗಳನ್ನು ಕೊಡಬಲ್ಲವನಾಗುವೆ*

---

**ಈ ನುಡಿಗಳು … ಕೊಡಬಲ್ಲವನಾಗುವೆ** ಅಥವಾ, “ಉಪದೇಶದ ಜ್ಞಾನ ನುಡಿಗಳನ್ನು ನಾನು ಮೊದಲು ನಿಮಗೆ ಬರೆಯಲಿಲ್ಲವೇ? 21ಸತ್ಯವಾದ ಮತ್ತು ಮುಖ್ಯವಾದ ಸಂಗತಿಗಳನ್ನು ನಿಮಗೆ ಉಪದೇಶಿಸುವುದಕ್ಕಾಗಿಯೇ ಅವುಗಳನ್ನು ಬರೆದೆನು. ನಿಮ್ಮನ್ನು ಕಳುಹಿಸುವವನಿಗೆ ನೀವು ವಿಶ್ವಾಸನೀಯವಾದ ವರದಿಯನ್ನು ಕೊಡಬೇಕೆಂಬುದೇ ನನ್ನ ಉದ್ದೇಶವಾಗಿತ್ತು.

*-1-*

22ಅಸಹಾಯಕರಾದ ಬಡವರಿಂದ ಕದ್ದುಕೊಳ್ಳಬೇಡ;
ನ್ಯಾಯಾಲಯದಲ್ಲಿ ಅವರಿಗೆ ಅನ್ಯಾಯಮಾಡಬೇಡ.
23ಯಾಕೆಂದರೆ ಯೆಹೋವನು ಅವರ ಪರವಾಗಿ ವಾದಿಸು
ವನು; ಅವರನ್ನು ದರೋಡೆ ಮಾಡಬೇಕೆಂದಿರುವವರ
ಪ್ರಾಣಗಳನ್ನು ತೆಗೆದುಹಾಕುವನು.

*-2-*

24ಮುಂಗೋಪಿಯ ಸ್ನೇಹಿತನಾಗಿರಬೇಡ. ತಟ್ಟನೆ
ಸಿಟ್ಟುಗೊಳ್ಳುವವನ ಸಮೀಪಕ್ಕೆ ಹೋಗಬೇಡ. 25ಇಲ್ಲ
ವಾದರೆ, ನೀನೂ ಅವನಂತಾಗುವೆ. ಆಗ ಅವನಿಗಿರುವ
ತೊಂದರೆಗಳು ನಿನಗೂ ಬರುತ್ತವೆ.

*-3-*

26ಬೇರೊಬ್ಬನ ಸಾಲಗಳಿಗೆ ಜಾಮೀನಾಗಬೇಡ.
27ನೀನು ಅವನ ಸಾಲವನ್ನು ತೀರಿಸಲಾಗದಿದ್ದರೆ, ನಿನ್ನಲ್ಲಿ
ರುವ ಪ್ರತಿಯೊಂದನ್ನು ಕಳೆದುಕೊಳ್ಳುವೆ. ನಿನ್ನ ಹಾಸಿಗೆ
ಯನ್ನು ನೀನೇಕೆ ಕಳೆದುಕೊಳ್ಳಬೇಕು.

*-4-*

28ಬಹುಕಾಲದ ಹಿಂದೆ ನಿನ್ನ ಪೂರ್ವಿಕರು ಜಮೀನಿಗೆ
ಹಾಕಿದ ಮೇರೆಗಲ್ಲನ್ನು ಎಂದಿಗೂ ಜರುಗಿಸಬೇಡ.

*-5-*

29ಚತುರ ಕೆಲಸಗಾರನು ರಾಜರ ಸೇವೆಗೆ ಯೋಗ್ಯ
ನಾಗಿದ್ದಾನೆ. ಅವನು ಸಾಮಾನ್ಯರ ಸೇವೆ ಮಾಡಬೇಕಿಲ್ಲ.

*-6-*

23 ಅಧಿಪತಿಯೊಂದಿಗೆ ಕುಳಿತುಕೊಂಡು ಊಟ
ಮಾಡುವಾಗ, ನೀನು ಯಾರೊಂದಿಗಿರುವೆ
ಎಂಬುದನ್ನು ಜ್ಞಾಪಿಸಿಕೊ. 2ನೀನು ತುಂಬ ಹಸಿವೆ
ಗೊಂಡಿದ್ದರೂ ಅತಿಯಾಗಿ ತಿನ್ನಬೇಡ. 3ಅವನು ಬಡಿಸುವ
ಒಳ್ಳೆಯ ಆಹಾರವನ್ನು ಅತಿಯಾಗಿ ತಿನ್ನಬೇಡ. ಅದು
ನಿನ್ನನ್ನು ಮೋಸಗೊಳಿಸುವ ಆಹಾರ.

*-7-*

4ಐಶ್ವರ್ಯವಂತನಾಗಬೇಕೆಂಬ ಪ್ರಯತ್ನದಲ್ಲಿ ನಿನ್ನ
ಆರೋಗ್ಯವನ್ನು ಕಳೆದುಕೊಳ್ಳಬೇಡ. ನೀನು ಜ್ಞಾನಿಯಾಗಿ
ದ್ದರೆ ತಾಳ್ಮೆಯಿಂದಿರುವೆ. 5ಪಕ್ಷಿಯಂತೆ ಹಾರಿ ಹೋಗು
ತ್ತದೊ ಎಂಬಂತೆ ಹಣವು ಬಹುಬೇಗನೆ ಇಲ್ಲವಾಗುವುದು.

*-8-*

6ಸ್ವಾರ್ಥಿಯೊಂದಿಗೆ ಊಟಮಾಡಬೇಡ. ಅವನು ಇಷ್ಟ
ಪಡುವ ಮೃಷ್ಟಾನ್ನದಿಂದ ದೂರವಿರು. 7ಅವನು ವೆಚ್ಚದ
ಬಗ್ಗೆ ಯೋಚಿಸುವಂಥವನು. ಅವನು ನಿನಗೆ, ‘‘ತಿನ್ನು,
ಕುಡಿ’’ ಎಂದು ಹೇಳಿದರೂ ಅವನ ಉದ್ದೇಶವೇ ಬೇರೆ.
8ನೀನು ಅವನ ಆಹಾರವನ್ನು ತಿಂದರೆ ವಾಂತಿಮಾಡುವೆ;
ಆಗ ನಿನ್ನ ಅಭಿನಂದನೆಯೆಲ್ಲಾ ವ್ಯರ್ಥ್ಯವಾಗುವುದು.

*-9-*

9ಮೂಢನಿಗೆ ಉಪದೇಶಿಸಲು ಪ್ರಯತ್ನಿಸಬೇಡ.
ಅವನು ನಿನ್ನ ಜ್ಞಾನದ ಮಾತುಗಳನ್ನು ಗೇಲಿಮಾಡುವನು.

*-10-*

10ಜಮೀನಿನ ಮೇರೆಯನ್ನು ಎಂದಿಗೂ ಒತ್ತಬೇಡ.
ಅನಾಥರಿಗೆ ಸೇರಿದ ಭೂಮಿಯನ್ನು ಎಂದಿಗೂ ಕಸಿದು
ಕೊಳ್ಳಬೇಡ. 11ಇಲ್ಲವಾದರೆ ಯೆಹೋವನು ನಿನಗೆ
ವಿರೋಧವಾಗುವನು; ಯೆಹೋವನು ಬಲಿಷ್ಠನೂ
ಅನಾಥರ ಪರವಾಗಿ ವಾದಿಸುವವನೂ ಆಗಿದ್ದಾನೆ.

*-11-*

12ನಿನ್ನ ಉಪದೇಶಕರಿಗೆ ಕಿವಿಗೊಟ್ಟು ನಿನ್ನಿಂದ ಸಾಧ್ಯ
ವಾದಷ್ಟು ಕಲಿತುಕೋ.

*-12-*

13ಅಗತ್ಯವೆನಿಸಿದರೆ ಮಗನನ್ನು ಬಾಲ್ಯದಲ್ಲಿಯೇ
ದಂಡಿಸು. ನಿನ್ನ ಹೊಡೆತದಿಂದ ಅವನೇನೂ ಸಾಯುವು
ದಿಲ್ಲ. 14ನಿನ್ನ ಹೊಡೆತವು ಅವನ ಜೀವವನ್ನು ಕಾಪಾಡ
ಬಲ್ಲದು.

*-13-*

15ನನ್ನ ಮಗನೇ, ನೀನು ಜ್ಞಾನಿಯಾಗಿದ್ದರೆ, ನನಗೆ
ಬಹು ಸಂತೋಷ. 16ನೀನು ಒಳ್ಳೆಯದನ್ನೇ ಹೇಳು
ವುದನ್ನು ಕೇಳುವಾಗ ನನ್ನ ಹೃದಯಕ್ಕೆ ಸಂತೋಷ
ವಾಗುವುದು.

*-14-*

17ಕೆಡುಕರ ಬಗ್ಗೆ ಹೊಟ್ಟೇಕಿಚ್ಚುಪಡಬೇಡ. ಆದರೆ
ಯೆಹೋವನಲ್ಲಿ ಭಯಭಕ್ತಿಯಿಂದಿರಲು ನಿನ್ನಿಂದಾ
ದಷ್ಟು ಪ್ರಯತ್ನಿಸು. 18ಆಗ ನಿನಗೆ ಒಳ್ಳೆಯ ಭವಿಷ್ಯವಿರು
ವುದು; ನಿನ್ನ ನಿರೀಕ್ಷೆಯು ನಿರರ್ಥಕವಾಗದು.

*-15-*

19ನನ್ನ ಮಗನೇ, ಕಿವಿಗೊಟ್ಟು ಕೇಳಿ ಜ್ಞಾನಿಯಾಗಿರು.
ಯಾವಾಗಲೂ ಎಚ್ಚರಿಕೆಯಿಂದಿದ್ದು ನೀತಿಮಾರ್ಗದಲ್ಲಿ
ಜೀವಿಸು. 20ಕುಡುಕರ ಮತ್ತು ಹೊಟ್ಟೆಬಾಕರ ಸ್ನೇಹಿತ
ನಾಗಿರಬೇಡ. 21ಕುಡುಕರೂ ಹೊಟ್ಟೆಬಾಕರೂ

ಬಡವರಾಗುವರು. ತಿಂದು ಕುಡಿದು ನಿದ್ರಿಸುವುದೇ ಅವರ
ಕಾರ್ಯಗಳು. ಅವರು ಬಹು ಬೇಗನೆ ಬಡವರಾಗುವರು.

*-16-*

22ನಿನ್ನ ತಂದೆಗೆ ಕಿವಿಗೊಡು. ಯಾಕೆಂದರೆ ನೀನು ಅವನ
ಮಗನು. ಅವನು ನಿನ್ನ ತಂದೆ. ನಿನ್ನ ತಾಯಿ ವೃದ್ಧಳಾಗಿರು
ವಾಗಲೂ ಆಕೆಯನ್ನು ಗೌರವಿಸು. 23ಸತ್ಯವನ್ನು
ಕೊಂಡುಕೋ; ಅದನ್ನು ಮಾರಬೇಡ. ಜ್ಞಾನವನ್ನು
ಸುಶಿಕ್ಷೆಯನ್ನು ಮತ್ತು ತಿಳುವಳಿಕೆಯನ್ನು ಕೊಂಡುಕೊ.
ಇವು ಖರೀದಿಗೆ ಯೋಗ್ಯವಾದವುಗಳೂ ಮಾರಲಾಗ
ದಷ್ಟು ಅಮೂಲ್ಯವಾದವುಗಳೂ ಆಗಿವೆ. 24ಒಳ್ಳೆಯವನ
ತಂದೆಗೆ ಬಹು ಸಂತೋಷ. ಜ್ಞಾನಿಯಾದ ಮಗನಿಂದ
ಆನಂದ 25ನಿನ್ನ ತಂದೆತಾಯಿಗಳು ನಿನ್ನೊಂದಿಗೆ
ಸಂತೋಷದಿಂದಿರಲಿ; ನಿನ್ನ ತಾಯಿಯು ಆನಂದಿಸಲಿ.

*-17-*

26ನನ್ನ ಮಗನೇ, ನನ್ನ ಉಪದೇಶವನ್ನು ಗಮನವಿಟ್ಟು
ಕೇಳು. ನನ್ನ ಜೀವಿತವು ನಿನಗೆ ಮಾದರಿಯಾಗಿರಲಿ.
27ಸೂಳೆಯರು ಮತ್ತು ಕೆಟ್ಟಹೆಂಗಸರು ಬಲೆಯಂತಿದ್ದಾರೆ;
ಮೇಲೇರಿ ಬರಲಾಗದ ಆಳವಾದ ಬಾವಿಯಂತಿದ್ದಾರೆ.
28ಕೆಟ್ಟ ಹೆಂಗಸು ಕಳ್ಳನಂತೆ ನಿನಗಾಗಿ ಕಾದಿರುವಳು.
ಅನೇಕ ಗಂಡಸರ ಪಾಪಕ್ಕೆ ಅವಳೇ ಕಾರಣ.

*-18-*

29-30ಯಾರಿಗೆ ಆಪತ್ತಿದೆ? ಯಾರಿಗೆ ಯಾತನೆಯಿದೆ?
ಯಾರಿಗೆ ಜಗಳಗಳಿವೆ? ಯಾರಿಗೆ ಉದ್ವೇಗವಿದೆ?
ಯಾರಿಗೆ ನಿಷ್ಕಾರಣವಾದ ಬಾಸುಂಡೆಗಳಿವೆ? ಯಾರಿಗೆ
ಕೆಂಪೇರಿದ ಕಣ್ಣುಗಳಿವೆ? 30ಮದ್ಯವನ್ನು ಅತಿಯಾಗಿ
ಕುಡಿಯುವವರಿಗೆ ಮತ್ತು ಮಿಶ್ರಣಗೊಂಡ ನಾನಾ
ಬಗೆಯ ಮದ್ಯಗಳನ್ನು ಕುಡಿಯುವವರಿಗೆ! 31ಆದ್ದರಿಂದ
ಮದ್ಯದ ಬಗ್ಗೆ ಎಚ್ಚರಿಕೆಯಾಗಿರು. ಅದು ಅಂದವಾಗಿದ್ದು
ಕೆಂಪಗೆ ಥಳಥಳಿಸುತ್ತದೆ. ನೀನು ಅದನ್ನು ಕುಡಿದಾಗ,
ನಯವಾಗಿ ಇಳಿದುಹೋಗುತ್ತದೆ. 32ಆದರೆ ಕೊನೆಯಲ್ಲಿ
ಅದು ವಿಷದ ಹಲ್ಲುಳ್ಳ ಹಾವಿನಂತೆ ಕಚ್ಚುವುದು.

33ಮದ್ಯವು ನಿನಗೆ ವಿಚಿತ್ರವಾದವುಗಳನ್ನು ಕಾಣಮಾಡು
ತ್ತದೆ. ನಿನ್ನ ಮನಸ್ಸನ್ನು ಗಲಿಬಿಲಿ ಮಾಡುತ್ತದೆ. 34ನೀನು
ಮಲಗಿ ಕೊಂಡಾಗ ಸಮುದ್ರದ ಅಲ್ಲೋಲ ಕಲ್ಲೋಲ
ಅಲೆಗಳ ಮೇಲಿರುವಂತೆಯೂ ಹಡಗಿನ ಮೇಲೆ ಮಲಗಿ
ಕೊಂಡಿರುವಂತೆಯೂ ನಿನಗನ್ನಿಸುವುದು. 35‘‘ಅವರು
ನನಗೆ ಬಡಿದರೂ ಗೊತ್ತಾಗಲಿಲ್ಲ; ಅವರು ನನಗೆ
ಹೊಡೆದರೂ ನನಗೆ ಬಡಿದರೂ ಅರಿವಾಗಲಿಲ್ಲ. ಈಗ
ನಾನು ಎಚ್ಚರಗೊಳ್ಳಲಾರೆ. ನನಗೆ ಮತ್ತಷ್ಟು ದ್ರಾಕ್ಷಾರಸ
ಬೇಕು’’ ಎಂದು ನೀನು ಹೇಳುವೆ.

*-19-*

24 ಕೆಡುಕರ ವಿಷಯದಲ್ಲಿ ಹೊಟ್ಟೇಕಿಚ್ಚು ಪಡ
ಬೇಡ; ಅವರೊಂದಿಗಿರಲು ಅಪೇಕ್ಷಿಸಬೇಡ.
2ಅವರು ಕೇಡುಮಾಡಲು ತಮ್ಮ ಹೃದಯಗಳಲ್ಲಿ
ಆಲೋಚಿಸಿಕೊಳ್ಳುವರು; ಅವರು ಕೇಡನ್ನೇ ಕುರಿತು
ಮಾತಾಡುವರು.

*-20-*

3ಒಳ್ಳೆಯ ಮನೆಯು ಜ್ಞಾನದ ಮೇಲೂ ತಿಳುವಳಿಕೆಯ
ಮೇಲೂ ಕಟ್ಟಲ್ಪಟ್ಟಿರುವುದು. 4ಅದರ ಕೋಣೆಗಳು
ಅಮೂಲ್ಯವಾದ ಭಂಡಾರಗಳಿಂದ ತುಂಬಿರುವುದು
ಜ್ಞಾನದಿಂದಲೇ.

*-21-*

5ಜ್ಞಾನವು ಮನುಷ್ಯನನ್ನು ಬಲಿಷ್ಠನನ್ನಾಗಿ ಮಾಡು
ವುದು. ವಿವೇಕವು ಮನುಷ್ಯನಿಗೆ ಬಲವನ್ನು ಕೊಡುತ್ತದೆ.
6ಯುದ್ಧವನ್ನು ಆರಂಭಿಸುವ ಮೊದಲೇ ಎಚ್ಚರಿಕೆಯಿಂದ
ಆಲೋಚಿಸು. ಜಯವನ್ನು ಗಳಿಸಬೇಕಾದರೆ ನಿನಗೆ
ಅನೇಕ ಒಳ್ಳೆಯ ಆಲೋಚನೆಗಾರರು ಅಗತ್ಯ.

*-22-*

7ಮೂಢರು ಜ್ಞಾನವನ್ನು ಅರ್ಥಮಾಡಿಕೊಳ್ಳಲಾರರು;
ಮುಖ್ಯವಾದ ವಿಷಯಗಳನ್ನು ಚರ್ಚಿಸುವಾಗ ಮೂಢನು
ಏನೂ ಹೇಳಲಾರ.

*-23-*

8ಕೇಡುಮಾಡುವವನನ್ನು ಜನರು ‘ಕೆಡುಕ’ ಎಂದು
ಕರೆಯುವರು.

9ಮೂಢನ ಆಲೋಚನೆಗಳೆಲ್ಲಾ ಪಾಪಮಯ. ದುರಾ
ಭಿಮಾನಿಯು ಜನರಿಗೆ ಅಸಹ್ಯ.

*-24-*

10ಕಷ್ಟದ ಸಮಯಗಳಲ್ಲಿ ನೀನು ಬಲಹೀನನಾಗಿದ್ದರೆ,
ನೀನು ನಿಜವಾಗಿಯೂ ಬಲಹೀನ.

*-25-*

11ಜನರು ಯಾರನ್ನಾದರೂ ಕೊಲ್ಲಬೇಕೆಂದಿದ್ದರೆ, ಅವ
ನನ್ನು ಉಳಿಸಲು ಪ್ರಯತ್ನಿಸು. 12‘‘ಇದರ ಬಗ್ಗೆ ನನಗೆ
ಗೊತ್ತಿರಲಿಲ್ಲ’’ ಎಂದು ನೀನು ಹೇಳಲಾಗದು.
ಯೆಹೋವನಿಗೆ ಪ್ರತಿಯೊಂದು ತಿಳಿದಿದೆ. ನಿನ್ನ ಕಾರ್ಯ
ಗಳ ಉದ್ದೇಶವೂ ಆತನಿಗೆ ತಿಳಿದಿದೆ. ಯೆಹೋವನು
ನಿನ್ನನ್ನು ಗಮನಿಸಿ ನಿನ್ನ ಕಾರ್ಯಗಳಿಗೆ ಪ್ರತಿಫಲ
ಕೊಡುವನು.

*-26-*

13ನನ್ನ ಮಗನೇ, ಜೇನುತುಪ್ಪವನ್ನು ತಿನ್ನು. ಅದು
ಒಳ್ಳೆಯದು. ಜೇನುಗೂಡಿನ ಜೇನುತುಪ್ಪ ಸಿಹಿ. 14ಅದೇ
ರೀತಿ ವಿವೇಕವು ನಿನ್ನ ಆತ್ಮಕ್ಕೆ ಒಳ್ಳೆಯದು. ನೀನು ಜ್ಞಾನ
ವನ್ನು ಕಂಡುಕೊಂಡರೆ ನಿನಗೆ ಒಳ್ಳೆಯ ಭವಿಷ್ಯವಿರು
ವುದು; ನಿನ್ನ ನಿರೀಕ್ಷೆ ಎಂದಿಗೂ ಕೊನೆಗೊಳ್ಳುವುದಿಲ್ಲ.
15ಒಳ್ಳೆಯವನಿಂದ ಕದ್ದುಕೊಳ್ಳುವ ಅಥವಾ ಅವನ ಮನೆ
ಯನ್ನೇ ತೆಗೆದುಕೊಳ್ಳುವ ಕಳ್ಳನಂತೆ ಇರಬೇಡ.
16ಒಳ್ಳೆಯವನು ಏಳುಸಲ ಬಿದ್ದರೂ ಅವನು ಮತ್ತೆ ಎದ್ದು
ನಿಲ್ಲುವನು. ಆದರೆ ಕೆಡುಕರು ಒಂದೇ ಆಪತ್ತಿನಿಂದ
ಶಾಶ್ವತವಾಗಿ ಸೋತು ಹೋಗುವರು.

*-28-*

17ನಿನ್ನ ವೈರಿ ತೊಂದರೆಯಲ್ಲಿರುವಾಗ ಸಂತೋಷಪಡ
ಬೇಡ; ಅವನು ಬೀಳುವಾಗಲೂ ಸಂತೋಷಪಡಬೇಡ.
18ಇಲ್ಲವಾದರೆ, ಯೆಹೋವನು ನಿನ್ನ ಮೇಲೆ ಕೋಪ
ಗೊಂಡು ನಿನ್ನ ವೈರಿಯನ್ನು ದಂಡಿಸದೆ ಹೋಗಬಹುದು.

*-29-*

19ಕೆಡುಕರ ಬಗ್ಗೆ ಅತಿಯಾಗಿ ಬೇಸರಗೊಳ್ಳಬೇಡ,
ಅವರ ಮೇಲೆ ಹೊಟ್ಟೆಕಿಚ್ಚು ಪಡಬೇಡ. 20ಆ ಕೆಡುಕರಿಗೆ
ನಿರೀಕ್ಷೆಯಿಲ್ಲ. ಅವರ ಬೆಳಕು ಕತ್ತಲೆಯಾಗುವುದು.

*-30-*

21ಮಗನೇ, ಯೆಹೋವನನ್ನೂ ರಾಜನನ್ನೂ
ಗೌರವಿಸು. ಅವರನ್ನು ವಿರೋಧಿಸುವವರ ಜೊತೆ ಸೇರ
ಬೇಡ.
22ಯಾಕೆಂದರೆ ಅವರು ಬೇಗನೆ ನಾಶವಾಗುವರು.
ದೇವರು ಮತ್ತು ರಾಜನು ತಮ್ಮ ವೈರಿಗಳಿಗೆ ಎಷ್ಟು
ಕೇಡುಮಾಡಬಲ್ಲರೆಂಬುದು ನಿನಗೆ ತಿಳಿಯದು.

**ಮತ್ತಷ್ಟು ಜ್ಞಾನೋಕ್ತಿಗಳು**

23ಇವು ಸಹ ಜ್ಞಾನಿಗಳ ಮಾತುಗಳು: ನ್ಯಾಯಾಧಿಪತಿ
ನ್ಯಾಯವಂತನಾಗಿರಬೇಕು. ಅವನು ಕೇವಲ ಪರಿಚಯದ
ನಿಮಿತ್ತ ಯಾರಿಗೂ ಸಹಾಯ ಮಾಡಕೂಡದು.
24ನ್ಯಾಯಾಧೀಶನು ಅಪರಾಧಿಗೆ, ‘‘ನೀನು ನಿರಪ
ರಾಧಿ’’ ಎಂದು ಹೇಳಿದರೆ, ಜನರು ನ್ಯಾಯಾಧೀಶನನ್ನು
ಶಪಿಸುವರು; ಜನಾಂಗಗಳು ಅವನನ್ನು ಖಂಡಿಸುವವು.
25ಆದರೆ ನ್ಯಾಯಾಧೀಶನು ಅಪರಾಧಿಯನ್ನು ದಂಡಿಸಿ
ದರೆ, ಜನರೆಲ್ಲರೂ ಅವನನ್ನು ಮೆಚ್ಚಿಕೊಳ್ಳುವರು;
ಅವನಿಗೆ ಮಹಾ ಆಶೀರ್ವಾದ ದೊರೆಯುವುದು.
26ಯಥಾರ್ಥವಾದ ಉತ್ತರ ಜನರೆಲ್ಲರನ್ನು ಸಂತೋಷ
ಗೊಳಿಸುವುದು; ಅದು ತುಟಿಯ ಮೇಲಿನ ಮುದ್ದಿನಂತಿದೆ.
27ಹೊಲಗಳಲ್ಲಿ ಬಿತ್ತುವ ಮೊದಲು ಮನೆಯನ್ನು ಕಟ್ಟ
ಬೇಡ. ವಾಸಕ್ಕಾಗಿ ಮನೆಯನ್ನು ಕಟ್ಟುವ ಮೊದಲೇ ನೀನು
ಬೇಸಾಯ ಮಾಡಲು ಸಿದ್ಧನಾಗಿರುವಿಯೊ ಎಂಬುದನ್ನು
ಖಾತರಿಪಡಿಸಿಕೊ.
28ಬೇರೊಬ್ಬನ ವಿರೋಧವಾಗಿ ಸಕಾರಣವಿಲ್ಲದೆ ಸಾಕ್ಷಿ
ಹೇಳಬೇಡ, ಸುಳ್ಳನ್ನೂ ಹೇಳಬೇಡ.
29‘‘ಅವನು ನನಗೆ ಕೇಡು ಮಾಡಿದನು. ಆದ್ದರಿಂದ
ನಾನೂ ಅವನಿಗೆ ಕೇಡು ಮಾಡುವೆ. ಅವನು ಮಾಡಿದ
ಕೇಡುಗಳಿಗಾಗಿ ಸೇಡು ತೀರಿಸಿಕೊಳ್ಳುವೆ’’ ಎಂದು ಹೇಳ
ಬೇಡ. 30ಸೋಮಾರಿಯ ಹೊಲದ ಸಮೀಪದಲ್ಲೂ
ಅಜ್ಞಾನಿಯ ದ್ರಾಕ್ಷಿತೋಟದ ಬಳಿಯಲ್ಲೂ ನಡೆದು
ಹೋದೆನು. 31ಆ ಹೊಲಗಳಲ್ಲಿ ಮುಳ್ಳುಗಿಡಗಳೂ ಉಪ
ಯೋಗವಿಲ್ಲದ ಸಸಿಗಳೂ ಬೆಳೆಯುತ್ತಿದ್ದವು. ಹೊಲಗಳ
ಸುತ್ತಲೂ ಇದ್ದ ಗೋಡೆ ಒಡೆದುಹೋಗಿತ್ತು; ಕುಸಿದು
ಬೀಳುತ್ತಿತ್ತು. 32ಅದನ್ನು ನೋಡಿ, ಆಲೋಚಿಸಿದೆ; ಒಂದು
ಪಾಠವನ್ನು ಕಲಿತುಕೊಂಡೆ; 33ಇನ್ನು ಸ್ವಲ್ಪ ನಿದ್ರೆ, ಇನ್ನು
ಸ್ವಲ್ಪ ವಿಶ್ರಾಂತಿ, ಇನ್ನು ಸ್ವಲ್ಪ ಕೈಮುದುರಿಕೊಳ್ಳುವೆ,
ಮಧ್ಯಾಹ್ನ ಇನ್ನು ಸ್ವಲ್ಪ ನಿದ್ರೆ ಮಾಡುವೆ ಎನ್ನುವೆಯಾ?
34ಇವು ನಿನ್ನನ್ನು ಬೇಗನೆ ಬಡವನನ್ನಾಗಿ ಮಾಡಿ ಬರಿದು
ಮಾಡುತ್ತದೆ; ಇದ್ದಕ್ಕಿದ್ದಂತೆ ಬಂದು ಎಲ್ಲವನ್ನು ದೋಚಿ
ಕೊಂಡು ಹೋಗುವ ಕಳ್ಳನಂತಿವೆ.

**ಸೊಲೊಮೋನನಿಂದ ಮತ್ತಷ್ಟು ಜ್ಞಾನೋಕ್ತಿಗಳು**

25 ಇವು ಸಹ ಸೊಲೊಮೋನನು ಹೇಳಿದ
ಜ್ಞಾನೋಕ್ತಿಗಳು. ಈ ನುಡಿಗಳನ್ನು ಯೆಹೂ
ದದ ರಾಜನಾಗಿದ್ದ ಹಿಜ್ಕೀಯನ ಸೇವಕರು ನಕಲು
ಮಾಡಿದರು:
2ವಿಷಯಗಳನ್ನು ರಹಸ್ಯಗೊಳಿಸಿದ್ದರಿಂದ ದೇವರಿಗೆ
ಸನ್ಮಾನ; ವಿಷಯಗಳನ್ನು ಕಂಡು ಹಿಡಿಯುವುದರಿಂದ
ರಾಜರಿಗೆ ಸನ್ಮಾನ.
3ಆಕಾಶದ ಎತ್ತರವನ್ನಾಗಲೀ ಭೂಮಿಯ ಆಳವ
ನ್ನಾಗಲೀ ಅಳೆಯಲು ಯಾರಿಗೆ ಸಾಧ್ಯ? ಅಂತೆಯೇ
ರಾಜರುಗಳ ಮನಸ್ಸನ್ನು ಯಾರೂ ಅರ್ಥಮಾಡಿ
ಕೊಳ್ಳಲಾರರು.
4ನೀನು ಬೆಳ್ಳಿಯಿಂದ ಕಲ್ಮಶವನ್ನು ತೆಗೆದುಹಾಕಿ ಶುದ್ಧ
ಗೊಳಿಸಿದರೆ, ಅಕ್ಕಸಾಲಿಗನು ಅದರಿಂದ ಸುಂದರವಾದ
ವಸ್ತುಗಳನ್ನು ಮಾಡಬಲ್ಲನು. 5ಅಂತೆಯೇ, ರಾಜನಿಂದ
ಕೆಟ್ಟ ಆಲೋಚನೆಗಾರರನ್ನು ತೆಗೆದುಹಾಕಿದರೆ, ಒಳ್ಳೆಯ
ತನವು ಅವನ ಆಡಳಿತವನ್ನು ಭದ್ರಗೊಳಿಸುತ್ತದೆ.
6ರಾಜನ ಮುಂದೆ ಜಂಬಕೊಚ್ಚಿಕೊಳ್ಳಬೇಡ. ಪ್ರಮು
ಖರ ಸ್ಥಳದಲ್ಲಿ ನಿಂತುಕೊಳ್ಳಬೇಡ. 7ಗಣ್ಯರ ಮುಂದೆ
ಅವಮಾನಿತನಾಗುವುದಕ್ಕಿಂತ, ‘‘ಮೇಲಕ್ಕೆ ಬಾ’’ ಎಂದು
ಹೇಳಿಸಿಕೊಳ್ಳುವುದೇ ಉತ್ತಮ.

8ನೀನು ಕಂಡ ಯಾವುದನ್ನಾದರೂ ನ್ಯಾಯಾಧೀಶನಿಗೆ
ತಿಳಿಸಲು ಆತುರಪಡಬೇಡ. ನೀನು ತಪ್ಪಿತಸ್ಥನೆಂದು
ಬೇರೊಬ್ಬನು ಹೇಳಿದರೆ, ನಿನಗೆ ಅವಮಾನವಾಗುವುದು.
9ನೀನು ನಿನ್ನ ನೆರೆಯವನೊಂದಿಗೆ ವಾಗ್ವಾದ ಮಾಡಿ
ದ್ದರೆ, ಗುಟ್ಟಾದ ವಿಷಯಗಳನ್ನು ಬೇರೊಬ್ಬನಿಗೆ ಪ್ರಕಟಿಸ
ಬೇಡ.
10ಇಲ್ಲವಾದರೆ ಅದನ್ನು ಕೇಳಿದವರೆಲ್ಲರೂ ನಿನ್ನನ್ನು
ಖಂಡಿಸುವರು; ಆ ಕೆಟ್ಟ ಹೆಸರು ನಿನ್ನನ್ನೆಂದಿಗೂ ಬಿಟ್ಟು
ಹೋಗದು.
11ನೀನು ಸರಿಸಮಯದಲ್ಲಿ ಒಳ್ಳೆಯದನ್ನು ಹೇಳಿದರೆ,
ಅದು ಬೆಳ್ಳಿಯ ತಟ್ಟೆಯಲ್ಲಿರುವ ಚಿನ್ನದ ಸೇಬಿ
ನಂತಿರುವುದು.
12ಜ್ಞಾನಿಯು ನಿನಗೆ ಕೊಡುವ ಎಚ್ಚರಿಕೆಯು ಚಿನ್ನದ
ಉಂಗುರಗಳಿಗಿಂತಲೂ ಬಂಗಾರದ ಆಭರಣಗಳಿ
ಗಿಂತಲೂ ಹೆಚ್ಚು ಬೆಲೆಭಾಳುತ್ತದೆ.
13ನಂಬಿಗಸ್ತನಾದ ಸಂದೇಶಕನಿಂದ ಯಜಮಾನನಿಗೆ
ಉಲ್ಲಾಸ. ಅವನು ಸುಗ್ಗೀಕಾಲದ ಬಿಸಿಲಿನ ದಿನಗ
ಳಲ್ಲಿರುವ ತಣ್ಣನೆಯ ಹಿಮದಂತಿರುವನು.
14ದಾನ ಮಾಡುವುದಾಗಿ ಹೇಳಿಯೂ ಮಾಡದವರು
ಮಳೆಯನ್ನು ತಾರದ ಮೋಡಗಳಂತೆಯೂ ಗಾಳಿ
ಯಂತೆಯೂ ಇರುವರು.
15ತಾಳ್ಮೆಯು ಅಧಿಪತಿಯನ್ನು ಸಹ ಮನವೊಪ್ಪಿಸು
ವುದು. ನಯವಾದ ಮಾತಿಗೆ ಬಹುಬಲ.
16ಜೇನುತುಪ್ಪ ಒಳ್ಳೆಯದು. ಆದರೆ ಅತಿಯಾಗಿ ತಿನ್ನ
ಬೇಡ. ಇಲ್ಲವಾದರೆ, ಕಾಯಿಲೆಬೀಳುವೆ. 17ಅಂತೆಯೇ,
ನಿನ್ನ ನೆರೆಯವನ ಮನೆಗೆ ಪದೇಪದೇ ಹೋಗಬೇಡ.
ನೀನು ಹೋದರೆ, ಅವನು ನಿನ್ನ ಮೇಲೆ ಬೇಸರ
ಗೊಳ್ಳುವನು.
18ನೆರೆಯವನ ವಿರುದ್ಧ ಸುಳ್ಳುಸಾಕ್ಷಿ ಹೇಳುವವನು
ಅಪಾಯಕಾರಿ. ಅವನು ದೊಣ್ಣೆಯಂತೆಯೂ ಕತ್ತಿ
ಯಂತೆಯೂ ಚೂಪಾದ ಬಾಣದಂತೆಯೂ ಇದ್ದಾನೆ.
19ಕಷ್ಟಕಾಲಗಳಲ್ಲಿ ಅಪನಂಬಿಗಸ್ತನನ್ನು ಆಶ್ರಯಿಸಿ
ಕೊಳ್ಳುವುದು ಮುರುಕುಹಲ್ಲಿನಿಂದ ತಿನ್ನುವಂತೆಯೂ
ಕುಂಟು ಕಾಲಿನಿಂದ ನಡೆಯುವಂತೆಯೂ ಇದೆ.
20ವ್ಯಸನದಿಂದಿರುವವನಿಗೆ ಸಂತಸದ ಗೀತೆಗಳನ್ನು
ಹಾಡಿದರೆ ಚಳಿಯಲ್ಲಿರುವವನ ಬಟ್ಟೆಯನ್ನು ತೆಗೆದು
ಹಾಕಿದಂತೆಯೂ ಗಾಯದ ಮೇಲೆ ಹುಳಿರಸವನ್ನು
ಸುರಿದಂತೆಯೂ ಇರುವುದು.
21ನಿನ್ನ ವೈರಿ ಹಸಿವೆಗೊಂಡಿದ್ದರೆ, ಅವನಿಗೆ ಊಟ
ಕೊಡು. ನಿನ್ನ ವೈರಿ ಬಾಯಾರಿದ್ದರೆ, ಅವನಿಗೆ ನೀರು
ಕೊಡು. 22ಆಗ, ಉರಿಯುವ ಕೆಂಡಗಳನ್ನು ಅವನ ತಲೆಯ
ಮೇಲೆ ಇಟ್ಟಂತಾಗುವುದು. ಯೆಹೋವನು ನಿನಗೆ ಅದರ
ಪ್ರತಿಫಲವನ್ನು ಕೊಡುವನು.
23ಉತ್ತರದಿಕ್ಕಿನಿಂದ ಬೀಸುವ ಗಾಳಿ ಮಳೆಯನ್ನು
ತರುವುದು. ಅಂತೆಯೇ ಚಾಡಿಮಾತು ಕೋಪಕ್ಕೆ ಕಾರಣ.
24ವಾದಿಸುವ ಹೆಂಡತಿಯೊಡನೆ ಮನೆಯಲ್ಲಿ ಇರುವುದ
ಕ್ಕಿಂತ ಮೇಲ್ಛಾವಣಿಗೆಯ ಮೂಲೆಯಲ್ಲಿ ವಾಸಿಸುವುದೇ
ಮೇಲು.
25ಬಹುದೂರದ ಒಳ್ಳೆಯ ಸುದ್ದಿಯು ಬಾಯಾರಿದವ
ನಿಗೆ ಕೊಟ್ಟ ತಣ್ಣನೆ ನೀರಿನಂತಿರುವುದು.
26ದುಷ್ಟನು ಒಳ್ಳೆಯವನಿಗೆ ಆಪತ್ತನ್ನು ಬರಮಾಡಿದರೆ,
ಅದು ಚಿಲುಮೆಗೆ ಮಣ್ಣುಹಾಕಿದಂತೆಯೂ ಒರತೆಯನ್ನು
ಹೊಲಸುಮಾಡಿದಂತೆಯೂ ಇದೆ.
27ಜೇನುತುಪ್ಪವನ್ನು ಅತಿಯಾಗಿ ತಿನ್ನುವುದು ಒಳ್ಳೆಯ
ದಲ್ಲ. ಅಂತೆಯೇ ನಿನಗೋಸ್ಕರ ಅತಿಯಾಗಿ ಸನ್ಮಾನವನ್ನು
ಬಯಸ ಬೇಡ.
28ತನ್ನನ್ನು ಹತೋಟಿಯಲ್ಲಿ ಇಟ್ಟುಕೊಳ್ಳಲಾರದವನು
ಕೋಟೆ ಬಿದ್ದುಹೋದ ಪಟ್ಟಣದಂತಿರುವನು.

## ಮೂಢರ ಬಗ್ಗೆ ಜ್ಞಾನದ ನುಡಿಗಳು

26 ಮೂಢನನ್ನು ಗೌರವಿಸುವುದು ಸರಿಯಲ್ಲ.
ಅದು ಬೇಸಿಗೆಕಾಲದಲ್ಲಿ ಬೀಳುವ ಹಿಮ
ದಂತೆಯೂ ಸುಗ್ಗೀ ಕಾಲದಲ್ಲಿ ಬೀಳುವ ಮಳೆ
ಯಂತೆಯೂ ಇದೆ.
2ಅಯೋಗ್ಯವಾದ ಶಾಪ ನಿರಪರಾಧಿಗೆ ತಟ್ಟುವುದಿಲ್ಲ. ಆ
ಶಾಪದ ಮಾತುಗಳು ಹಾರಿಹೋಗಿ ಎಂದೂ ಕೆಳಗಿಳಿಯದ
ಪಕ್ಷಿಗಳಂತಿವೆ.
3ಕುದುರೆಗೆ ಚಬುಕ ಬೇಕು. ಹೇಸರಕತ್ತೆಗೆ ಕಡಿವಾಣ
ಬೇಕು. ಮೂಢನಿಗೆ ಹೊಡೆತ ಬೇಕು.
4ಮೂಢನಿಗೆ ಅವನ ಮೂರ್ಖತನದ ಮಟ್ಟದಲ್ಲಿ
ಉತ್ತರ ಕೊಡಬೇಡ; ಇಲ್ಲವಾದರೆ ನೀನೂ ಅವನಂತಾ
ಗುವೆ. 5ಮೂಢನಿಗೆ ಅವನ ಮೂಢತನದ ಮಟ್ಟದಲ್ಲಿ
ಉತ್ತರಿಸು; ಇಲ್ಲವಾದರೆ ಅವನು ತನ್ನನ್ನು ಜ್ಞಾನಿಯೆಂದು
ಭಾವಿಸಿಕೊಳ್ಳುವನು.
6ನಿನ್ನ ಸಂದೇಶವನ್ನು ಮೂಢನ ಮೂಲಕ ಎಂದಿಗೂ
ಕಳುಹಿಸಿಕೊಡಬೇಡ. ಅದು ನಿನ್ನ ಸ್ವಂತ ಕಾಲನ್ನೇ ಕತ್ತರಿಸಿ
ಕೊಂಡಂತಿರುವುದು; ನೀನೇ ಕೇಡಿಗಾಗಿ ಕೇಳಿ
ಕೊಂಡಂತಾಗುವುದು.
7ಮೂಢನು ಜ್ಞಾನದ ಮಾತನ್ನು ಹೇಳಲು ಮಾಡುವ
ಪ್ರಯತ್ನವು, ಕುಂಟನು ನಡೆಯಲು ಮಾಡುವ ಪ್ರಯತ್ನ
ದಂತಿದೆ.
8ಮೂಢನಿಗೆ ತೋರುವ ಗೌರವ, ಕವಣೆಯಲ್ಲಿರುವ
ಕಲ್ಲಿನಷ್ಟೇ ಕೆಟ್ಟದ್ದು.
9ಮೂಢನು ಜ್ಞಾನೋಕ್ತಿಯನ್ನು ಬಳಸಲು ಮಾಡುವ
ಪ್ರಯತ್ನವು ಕುಡುಕನೊಬ್ಬನು ಮುಳ್ಳುಕೊಂಬೆ
ಯೊಂದನ್ನು ತನ್ನ ಕೈಯಲ್ಲಿ ಝುಳಪಿಸುವಂತಿರುವುದು.

[10]ಮೂಢನನ್ನಾಗಲೀ ಕುಡುಕನನ್ನಾಗಲೀ ಕೂಲಿಗೆ ನೇಮಿಸಿಕೊಳ್ಳುವವನು ಹಾದುಹೋಗುವವರಿಗೆಲ್ಲ ಗಾಯ ಮಾಡುವ ಬಿಲ್ಲುಗಾರನಂತಿರುವನು.

[11]ನಾಯಿ ತಾನು ಕಕ್ಕಿದ್ದನ್ನೇ ತಿನ್ನಲು ಹಿಂತಿರುಗುವಂತೆ ಮೂಢನು ತನ್ನ ಮೂಢತನವನ್ನು ಪದೇಪದೇ ಮಾಡುವನು.

[12]ಅಜ್ಞಾನಿಯು ತನ್ನನ್ನು ಜ್ಞಾನಿಯೆಂದು ಭಾವಿಸಿಕೊಂಡರೆ ಅವನು ಮೂಢನಿಗಿಂತಲೂ ಕೀಳಾದವನು.

### ಸೋಮಾರಿಗಳ ಬಗ್ಗೆ ಜ್ಞಾನದ ನುಡಿಗಳು

[13]“ನಾನು ನನ್ನ ಮನೆಯಿಂದ ಹೊರಗೆ ಹೋಗಲಾರೆ. ಬೀದಿಯಲ್ಲಿ ಸಿಂಹವಿದೆ” ಎನ್ನುತ್ತಾನೆ ಸೋಮಾರಿ.

[14]ಬಾಗಿಲು ತಿರುಗುಣಿಯ ಮೇಲೆ ಸುತ್ತುವಂತೆ ಸೋಮಾರಿಯು ತನ್ನ ಹಾಸಿಗೆಯ ಮೇಲೆ ಹೊರಳಾಡುವನು.

[15]ಸೋಮಾರಿಯು ತಟ್ಟೆಯಲ್ಲಿರುವ ಊಟವನ್ನು ತಿನ್ನುವುದಕ್ಕೂ ಬಹು ಆಯಾಸಪಡುವನು.

[16]ತಮ್ಮ ಆಲೋಚನೆಗಳಿಗೆ ಒಳ್ಳೆಯ ಕಾರಣಗಳನ್ನು ಕೊಡುವ ಏಳು ಜನರಿಗಿಂತಲೂ ತಾನು ಜ್ಞಾನಿಯೆಂದು ಸೋಮಾರಿಯು ಭಾವಿಸುವನು.
[17]ಬೇರೆಯವರ ವಾಗ್ವಾದದಲ್ಲಿ ಮಧ್ಯೆ ಪ್ರವೇಶಿಸಲು ಮಾಡುವ ಪ್ರಯತ್ನ ಹಾದಿಯಲ್ಲಿ ಹೋಗುತ್ತಿರುವ ನಾಯಿಯ ಕಿವಿಗಳನ್ನು ಹಿಡಿದುಕೊಳ್ಳುವಷ್ಟೇ ಅಪಾಯಕರ.

[18-19]ಮತ್ತೊಬ್ಬನನ್ನು ಮೋಸಗೊಳಿಸಿ ತಾನು ಕೇವಲ ತಮಾಷೆಮಾಡಿದ್ದಾಗಿ ಹೇಳುವವನು ಉರಿಯುವ ಬಾಣಗಳನ್ನು ಆಕಾಶದ ಕಡೆಗೆ ಎಸೆದು ಬೇರೊಬ್ಬನನ್ನು ಆಕಸ್ಮಿಕವಾಗಿ ಕೊಲ್ಲುವ ಹುಚ್ಚನಂತಿರುವನು.

[20]ಸೌದೆ ಇಲ್ಲದಿದ್ದರೆ ಬೆಂಕಿಯು ಆರಿಹೋಗುವುದು. ಅಂತೆಯೇ ಹುರುಳಿಲ್ಲದ ವಾಗ್ವಾದ ನಿಂತುಹೋಗುವುದು.

[21]ಕೆಂಡದಿಂದ ಕಲ್ಲಿದ್ದಲು ಉರಿಯುತ್ತದೆ; ಸೌದೆಯಿಂದ ಬೆಂಕಿ ಉರಿಯುತ್ತದೆ; ಅಂತೆಯೇ ಜಗಳಗಂಟರು ವಾಗ್ವಾದ ವನ್ನು ಮುಂದುವರಿಸುವರು.

[22]ಹರಟೆಮಾತು ಜನರಿಗೆ ಪ್ರಿಯ. ಅವರಿಗೆ ಅದು ಒಳ್ಳೆಯ ಆಹಾರವನ್ನು ತಿಂದಂತಿರುವುದು.

[23]ಕೆಟ್ಟ ಆಲೋಚನೆಯನ್ನು ಅಡಗಿಸಿಡುವ ಕನಿಕರದ ಮಾತುಗಳು ಕಡಿಮೆ ಬೆಲೆಯ ಮಡಿಕೆಯ ಮೇಲಿನ ಬೆಳ್ಳಿಯ ಲೇಪನದಂತಿವೆ.
[24]ಕೆಡುಕನು ತಾನು ಹೇಳುವ ಸಂಗತಿಗಳ ಮೂಲಕ ತನ್ನನ್ನು ಒಳ್ಳೆಯವನನ್ನಾಗಿ ತೋರಿಸಿಕೊಳ್ಳುವನು. ಆದರೆ ಅವನು ತನ್ನ ಕೆಟ್ಟ ಆಲೋಚನೆಗಳನ್ನು ತನ್ನ ಹೃದಯದಲ್ಲಿ ಅಡಗಿಸಿಕೊಳ್ಳುವನು.
[25]ಅವನು ಹೇಳುವ ಸಂಗತಿಗಳು ಒಳ್ಳೆಯದಾಗಿ ಕಂಡರೂ ಅವನನ್ನು ನಂಬಬೇಡಿ. ಅವನ ಹೃದಯವು ಕೆಟ್ಟ ಆಲೋಚನೆಗಳಿಂದ ತುಂಬಿದೆ.
[26]ದ್ವೇಷವು ತನ್ನನ್ನು ಮೋಸದಿಂದ ಮರೆಮಾಡಿಕೊಳ್ಳುತ್ತದೆ. ಆದರೆ ಅವನು ಕೀಳಾದವನು; ಕೊನೆಯಲ್ಲಿ, ಅವನ ಕೆಟ್ಟಕಾರ್ಯಗಳನ್ನು ಜನರೆಲ್ಲರೂ ನೋಡುವರು.

[27]ಮತ್ತೊಬ್ಬನಿಗೆ ಬಲೆಹಾಕುವವನು ತನಗೇ ಬಲೆಹಾಕಿಕೊಳ್ಳುವನು. ಮತ್ತೊಬ್ಬನ ಮೇಲೆ ಬಂಡೆ ಉರುಳಿಸಲು ಪ್ರಯತ್ನಿಸುವವನು ಅದರಿಂದಲೇ ಜಜ್ಜಲ್ಪಡುವನು.

[28]ಸುಳ್ಳುಗಾರನು ತಾನು ಕೇಡುಮಾಡಲಿರುವ ಜನರನ್ನು ದ್ವೇಷಿಸುವನು. ಕಪಟದ ಸಂಗತಿಗಳನ್ನು ಹೇಳುವವನು ತನ್ನನ್ನೇ ನಾಶಪಡಿಸಿಕೊಳ್ಳುವನು.

27 ಭವಿಷ್ಯತ್ತಿನ ಕುರಿತು ಜಂಬಪಡಬೇಡ. ನಾಳೆ ಏನಾಗುವುದೋ ನಿನಗೆ ತಿಳಿಯದು.

[2]ನಿನ್ನನ್ನು ಹೊಗಳಿಕೊಳ್ಳಬೇಡ; ಬೇಕಿದ್ದರೆ ಬೇರೆಯವರೇ ನಿನ್ನನ್ನು ಹೊಗಳಲಿ.

[3]ಕಲ್ಲು ಭಾರ, ಮರಳು ಭಾರ, ಮೂಢನಿಂದಾಗುವ ಕೇಡು ಇವೆರಡಕ್ಕಿಂತಲೂ ಬಹುಭಾರ.

[4]ಕೋಪವು ಕ್ರೂರ; ಅದು ಪ್ರವಾಹದಂತೆ ನಾಶಕರ. ಹೊಟ್ಟೇಕಿಚ್ಚು ಅದಕ್ಕಿಂತಲೂ ನಾಶಕರ.

[5]ಬಹಿರಂಗವಾದ ಟೀಕೆ ಗುಟ್ಟಾದ ಪ್ರೀತಿಗಿಂತಲೂ ಉತ್ತಮ.

[6]ಸ್ನೇಹಿತನಿಂದಾಗುವ ಗಾಯಗಳು ಸಹಾಯಕರ. ಶತ್ರುವಿನ ಮುತ್ತುಗಳಾದರೊ ಮೋಸಕರ.

[7]ಹೊಟ್ಟೆ ತುಂಬಿದವನು ಜೇನುತುಪ್ಪವನ್ನೂ ತಿರಸ್ಕರಿಸುವನು; ಹಸಿವೆಗೊಂಡಿರುವವನಿಗೋ ಕಹಿಯೂ ಸಿಹಿ.

[8]ಮನೆಯಿಂದ ದೂರವಿರುವ ಗಂಡಸು ಗೂಡಿನಿಂದ ದೂರವಿರುವ ಪಕ್ಷಿಯಂತಿರುವನು.

[9]ಪರಿಮಳ ತೈಲ ಮತ್ತು ಧೂಪ ನಿನ್ನನ್ನು ಸಂತೋಷಗೊಳಿಸುತ್ತವೆ; ಆದರೆ ಸ್ನೇಹಿತನ ಮಧುರವಾದ ಉಪದೇಶದಿಂದ ಸ್ವಂತ ನಿರ್ಧಾರಕ್ಕಿಂತಲೂ ಹೆಚ್ಚು ಆನಂದವಾಗುವುದು.

[10]ನಿನ್ನ ಸ್ನೇಹಿತರನ್ನೂ ನಿನ್ನ ತಂದೆಯ ಸ್ನೇಹಿತರನ್ನೂ ಮರೆಯಬೇಡ. ಕಷ್ಟಬಂದಾಗ ಸಹಾಯ ಕೇಳಲು ಬಹುದೂರ ವಿರುವ ನಿನ್ನ ಸಹೋದರನ ಮನೆಗೆ ಹೋಗುವುದಕ್ಕಿಂತ ನಿನ್ನ ಸಮೀಪದಲ್ಲಿರುವ ನೆರೆಯವನನ್ನು ಕೇಳುವುದೇ ಉತ್ತಮ.

[11]ನನ್ನ ಮಗನೇ, ನೀನು ಜ್ಞಾನಿಯಾಗಿದ್ದರೆ ನನಗೆ ಸಂತೋಷ. ಆಗ, ನನ್ನನ್ನು ಟೀಕಿಸುವವನಿಗೆ ಉತ್ತರ ಕೊಡಲು ನಾನು ಶಕ್ತನಾಗುವೆ.

[12]ಜ್ಞಾನಿಯು ಕೇಡನ್ನು ಕಂಡು ಆ ದಾರಿಯನ್ನೇ ಬಿಟ್ಟು ಹೋಗುವನು. ಮೂಢನಾದರೊ ಕೇಡಿಗೆ ನೇರವಾಗಿ ನಡೆದು ಕಷ್ಟಕ್ಕೆ ಗುರಿಯಾಗುವನು.

[13]ಬೇರೊಬ್ಬನ ಸಾಲಕ್ಕೆ ನೀನು ಜಾಮೀನಾದರೆ, ನಿನ್ನ ಅಂಗಿ ಯನ್ನೂ ಕಳೆದುಕೊಳ್ಳುವೆ.

14ಹೊತ್ತಾರೆಯಲ್ಲಿ ನಿನ್ನ ನೆರೆಯವನಿಗೆ, ‘‘ನಮಸ್ಕಾರ!’’
ಎಂದು ಕೂಗಿ ಎಬ್ಬಿಸಬೇಡ. ಅವನಿಗೆ ಅದು ಆಶೀರ್ವಾದ
ದಂತೆ ಕಾಣದೆ ಶಾಪದಂತೆಯೇ ಕಾಣುವುದು.

15ವಾದವನ್ನೇ ಇಚ್ಛಿಸುವ ಹೆಂಡತಿ ಮಳೆ ದಿನದಲ್ಲಿ
ಸೋರುತ್ತಲೇ ಇರುವ ಮೇಲ್ಛಾವಣಿಯಂತಿರುವಳು.
16ಆಕೆಯ ಬಾಯನ್ನು ಮುಚ್ಚಿಸಲು ಮಾಡುವ ಪ್ರಯತ್ನ
ಗಾಳಿಯನ್ನು ನಿಲ್ಲಿಸಲು ಪ್ರಯತ್ನಿಸಿದಂತೆಯೂ ಅಂಗೈಲಿ
ಎಣ್ಣೆಯನ್ನು ಹಿಡಿದುಕೊಳ್ಳಲು ಪ್ರಯತ್ನಿಸಿದಂತೆಯೂ
ಇದೆ.

17ಕಬ್ಬಿಣವು ಕಬ್ಬಿಣವನ್ನು ಹರಿತಗೊಳಿಸುವುದು;
ಅಂತೆಯೇ ಸ್ನೇಹಿತನು ಸ್ನೇಹಿತನನ್ನು ಉತ್ತಮ
ಪಡಿಸುವನು.

18ಅಂಜೂರದ ಮರಗಳನ್ನು ನೋಡಿಕೊಳ್ಳುವವನು
ಅವುಗಳ ಹಣ್ಣನ್ನು ತಿನ್ನುವನು; ಯಜಮಾನನನ್ನು ನೋಡಿ
ಕೊಳ್ಳು ವವನು ಪ್ರತಿಫಲವನ್ನು ಹೊಂದುವನು.

19ನೀರನ್ನು ನೋಡುವವನಿಗೆ ಅವನ ಮುಖವು ಕಾಣು
ವುದು. ಅಂತೆಯೇ ಹೃದಯವು ವ್ಯಕ್ತಿಯ ನಿಜರೂಪವನ್ನು
ತೋರುವುದು.

20ಮರಣಕ್ಕಾಗಲೀ ಸಮಾಧಿಗಾಗಲೀ ತೃಪ್ತಿಯೇ ಇಲ್ಲ.
ಅಂತೆಯೇ ಮನುಷ್ಯನ ಬಯಕೆಗಳಿಗೂ ಕೊನೆಯಿಲ್ಲ.

21ಚಿನ್ನವಾಗಲೀ ಬೆಳ್ಳಿಯಾಗಲೀ ಬೆಂಕಿಯಿಂದ
ಶುದ್ಧೀಕರಿಸಲ್ಪಡುವಂತೆಯೇ ಮನುಷ್ಯನು ಜನರಿಂದ
ಬರುವ ಹೊಗಳಿಕೆಯಿಂದ ಪರೀಕ್ಷಿತನಾಗುವನು.

22ನೀನು ಮೂಢನನ್ನು ಅರೆದು ಪುಡಿಪುಡಿ ಮಾಡಿ
ದರೂ ಅವನ ಮೂಢತನವನ್ನು ತೊಲಗಿಸಲಾರೆ.

23ನಿನ್ನ ಕುರಿಗಳನ್ನೂ ಪಶುಗಳನ್ನೂ ಎಚ್ಚರಿಕೆಯಿಂದ
ಕಾಯ್ದುಕೊಂಡಿರು; ನಿನ್ನಿಂದಾದಷ್ಟು ಮಟ್ಟಿಗೆ ಅವುಗಳ
ಮೇಲೆ ಗಮನವಿಟ್ಟು ನೋಡಿಕೊ. 24ಐಶ್ವರ್ಯ ಸದಾ
ಕಾಲ ಇರುವಂಥ ದ್ದಲ್ಲ. ಅಂತೆಯೇ ಸಾಮ್ರಾಜ್ಯಗಳು
ಶಾಶ್ವತವಾಗಿರುವುದಿಲ್ಲ.

25ಹುಲ್ಲನ್ನು ಕತ್ತರಿಸಿದ ಮೇಲೆ ಹೊಸಹುಲ್ಲು ಬೆಳೆಯ
ಲಾರಂಭಿಸುವುದು; ಒಣಹುಲ್ಲನ್ನು ಬೆಟ್ಟಗಳ ಮೇಲೆ
ಸಂಗ್ರಹಿಸಲಾಗುವುದು. 26ಬಳಿಕ ನಿನ್ನ ಕುರಿಗಳ ಉಣ್ಣೆ
ಯಿಂದ ಬಟ್ಟೆಗಳನ್ನು ತಯಾರಿಸಬಹುದು. ನಿನ್ನ ಆಡು
ಗಳನ್ನು ಮಾರಿ ಬಂದ ಹಣದಿಂದ ಜಮೀನನ್ನು ಕೊಂಡು
ಕೊಳ್ಳಬಹುದು.

27ನಿನ್ನ ಇನ್ನಿತರ ಆಡುಗಳು ನಿನಗೆ ಬೇಕಾದಷ್ಟು
ಹಾಲನ್ನು ಕೊಡುತ್ತವೆ. ಅದರಿಂದ ನಿನಗೂ ನಿನ್ನ
ಕುಟುಂಬಕ್ಕೂ ನಿನ್ನ ಸೇವಕಿಯರಿಗೂ ಬೇಕಾದಷ್ಟು
ಆಹಾರವಿರುವುದು.

28 ಹಿಂದಟ್ಟದಿದ್ದರೂ ದುಷ್ಟನು ಓಡಿ ಹೋಗು
ವನು. ಆದರೆ ಒಳ್ಳೆಯವನು ಸಿಂಹದಂತೆ ಧೀರ
ನಾಗಿರುವನು.

2ದೇಶದಲ್ಲಿ ದಂಗೆಯೇಳುತ್ತಲೇ ಇದ್ದರೆ ಅಧಿಪತಿಗಳು
ಬದಲಾಗುತ್ತಲೇ ಇರುವರು. ಜ್ಞಾನಿಯೂ ಅನು
ಭವಸ್ಥನೂ ಆಗಿರುವ ಅಧಿಪತಿಯ ದೇಶ ಸ್ಥಿರ
ವಾಗಿರುವುದು.

3ಬಡಜನರನ್ನು ದರೋಡೆಮಾಡುವ ಬಡವನು ಬೆಳೆ
ಯನ್ನು ನಾಶಮಾಡುವ ಬಿರುಸಾದ ಮಳೆಯಂತಿರುವನು.

4ನೀನು ನ್ಯಾಯಪ್ರಮಾಣಕ್ಕೆ ವಿಧೇಯನಾಗದಿದ್ದರೆ
ಕೆಡುಕರ ಪರವಾಗಿರುವೆ. ನೀನು ನ್ಯಾಯಪ್ರಮಾಣಕ್ಕೆ
ವಿಧೇಯ ನಾಗಿದ್ದರೆ ಕೆಡುಕರಿಗೆ ವಿರೋಧವಾಗಿರುವೆ.

5ಕೆಡುಕರು ನ್ಯಾಯವನ್ನು ಅರ್ಥಮಾಡಿಕೊಳ್ಳಲಾರರು;
ಯೆಹೋವನನ್ನು ಪ್ರೀತಿಸುವ ಜನರಾದರೋ ಅದನ್ನು
ಸಂಪೂರ್ಣವಾಗಿ ಅರ್ಥಮಾಡಿಕೊಳ್ಳುವರು.

6ಮೋಸದಿಂದ ಐಶ್ವರ್ಯ ವಂತರಾಗುವುದಕ್ಕಿಂತ
ಯಥಾರ್ಥವಾಗಿದ್ದು ಬಡವರಾಗಿರುವುದೇ ಮೇಲು.

7ನ್ಯಾಯಪ್ರಮಾಣಕ್ಕೆ ವಿಧೇಯನಾಗುವವನು ಜಾಣ.
ಅಯೋಗ್ಯರ ಸ್ನೇಹಿತನು ತನ್ನ ತಂದೆಗೇ ಅವಮಾನ
ತರುವನು.

8ಬಡವರಿಗೆ ಮೋಸಮಾಡಿ ಗಳಿಸಿದ ಐಶ್ವರ್ಯ ಕಳೆದು
ಹೋಗುವುದು; ಬಡವರಿಗೆ ದಯೆತೋರುವವನಿಗೆ ಅದು
ದೊರೆಯುವುದು.

9ದೇವರ ಉಪದೇಶವನ್ನು ತಿರಸ್ಕರಿಸುವವನ ಪ್ರಾರ್ಥನೆ
ಯನ್ನು ದೇವರೂ ತಿರಸ್ಕರಿಸುವನು.

10ಒಳ್ಳೆಯವರನ್ನು ದಾರಿತಪ್ಪಿಸಿ ಅಪಾಯದ ಮಾರ್ಗ
ದಲ್ಲಿ ನಡೆಸುವವನು ತಾನು ತೋಡಿದ ಗುಂಡಿಗೆ ತಾನೇ
ಬೀಳುವನು.

11ಐಶ್ವರ್ಯವಂತರು ತಮ್ಮನ್ನೇ ಬುದ್ಧಿವಂತರೆಂದು
ಭಾವಿಸುತ್ತಾರೆ. ಜ್ಞಾನಿಯಾಗಿರುವ ಬಡವನಾದರೊ
ಸತ್ಯವನ್ನು ಕಾಣಬಲ್ಲನು.

12ಒಳ್ಳೆಯವರು ನಾಯಕರಾದಾಗ ಎಲ್ಲರಿಗೂ
ಸಂತೋಷ. ಆದರೆ ಕೆಡುಕನು ಅಧಿಪತಿಯಾದಾಗ
ಎಲ್ಲರೂ ಅಡಗಿಕೊಳ್ಳುವರು.

13ಪಾಪಗಳನ್ನು ಅಡಗಿಸಿಕೊಳ್ಳುವವನಿಗೆ ಯಶಸ್ಸು
ಇಲ್ಲವೇ ಇಲ್ಲ. ತನ್ನ ಪಾಪವನ್ನು ಅರಿಕೆಮಾಡಿ ಬಿಟ್ಟು
ಬಿಡುವವನಿಗೆ ಕರುಣೆ ದೊರೆಯುವುದು.

14ಕೇಡನ್ನು ಮಾಡಲು ಭಯಪಡುವವನು ಆಶೀ
ರ್ವಾದ ಹೊಂದುವನು. ಆದರೆ ಮೊಂಡನು ಆಪತ್ತಿಗೆ ಸಿಕ್ಕಿ
ಬೀಳುವನು.

15ಬಲಹೀನರನ್ನು ಆಳುವ ಕೆಡುಕನು ಗರ್ಜಿಸುವ ಸಿಂಹ
ದಂತಿರುವನು; ಮೇಲೆರಗಲಿರುವ ಕರಡಿಯಂತಿರುವನು.

16ಜ್ಞಾನಿಯಲ್ಲದ ಅಧಿಪತಿ ತನ್ನ ಅಧೀನದಲ್ಲಿರುವ
ವರಿಗೆ ಕೇಡುಮಾಡುವನು. ಅನ್ಯಾಯದ ಹಣವನ್ನು
ತೆಗೆದುಕೊಳ್ಳದ ಅಧಿಪತಿ ಬಹುಕಾಲ ಆಳುವನು.

17ಕೊಲೆಮಾಡಿದ ಅಪರಾಧಿಯು ತನ್ನ ಸಮಾಧಿಗೆ ಓಡಿ ಹೋಗಲಿ. ಅವನಿಗೆ ಸಹಾಯಮಾಡಬೇಡ.

18ಒಳ್ಳೆಯವನು ಕ್ಷೇಮವಾಗಿರುವನು; ಕೆಡುಕನಾದರೂ ಇದ್ದಕ್ಕಿದ್ದಂತೆ ಹಾಳಾಗುವನು.

19ಕಷ್ಟಪಟ್ಟು ದುಡಿಯುವವನಿಗೆ ಬೇಕಾದಷ್ಟು ಆಹಾರವಿರುವುದು. ನನಸಾಗದ ಕನಸುಗಳನ್ನೇ ಆಲೋಚಿಸಿಕೊಂಡಿರುವವನು ಬಡವನಾಗಿಯೇ ಇರುವನು.

20ನಂಬಿಗಸ್ತನು ಬಹಳವಾಗಿ ಆಶೀರ್ವದಿಸಲ್ಪಡುವನು. ಐಶ್ವರ್ಯವಂತನಾಗುವುದಕ್ಕಾಗಿಯೇ ಪ್ರಯತ್ನಿಸುವವನು ದಂಡನೆ ಹೊಂದುವನು.

21ಪಕ್ಷಪಾತ ತಪ್ಪು. ಕೆಲವರಾದರೂ ಒಂದು ತುಂಡು ರೊಟ್ಟಿಗಾಗಿಯೂ ತಪ್ಪು ಮಾಡುವರು.

22ಜಿಪುಣನು ಐಶ್ವರ್ಯವಂತನಾಗಲು ಆತುರಪಡುವನು: ಆದರೆ ತಾನು ಬೇಗನೆ ಬಡವನಾಗಲಿರುವುದನ್ನು ಅವನು ಗ್ರಹಿಸಿಕೊಳ್ಳಲಾರನು.

23ಗದರಿಸುವವನು ಸ್ವಲ್ಪಕಾಲದನಂತರ ಮುಖ ಸ್ತುತಿ ಮಾಡುವವನಿಗಿಂತಲೂ ಹೆಚ್ಚಾಗಿ ಗೌರವಿಸಲ್ಪಡುವನು.

24ಕೆಲವರು ತಮ್ಮ ತಂದೆತಾಯಿಗಳಿಂದ ಕದ್ದುಕೊಂಡು, ‘‘ಅದು ತಪ್ಪಲ್ಲ’’ ಎಂದು ಹೇಳುವರು. ಅವರು ನಾಶಕದಷ್ಟೇ ಕೆಟ್ಟವರಾಗಿದ್ದಾರೆ.

25ದುರಾಶೆಯುಳ್ಳವನು ಜಗಳಗಳನ್ನು ಎಬ್ಬಿಸುತ್ತಾನೆ. ಯೆಹೋವನಲ್ಲಿ ಭರವಸೆ ಇಡುವವನಾದರೂ ಅಭಿವೃದ್ಧಿ ಹೊಂದುವನು.

26ಸ್ವಂತ ಆಲೋಚನೆಯ ಮೇಲೆ ಭರವಸೆ ಇಡುವವನು ಮೂರ್ಖನಾಗಿದ್ದಾನೆ. ಜ್ಞಾನಮಾರ್ಗದಲ್ಲಿ ನಡೆಯುವವನು ಸುರಕ್ಷಿತನಾಗಿರುವನು.

27ಬಡವರಿಗೆ ಕೊಡುವವನು ತನಗೆ ಅಗತ್ಯವಾದ ಪ್ರತಿಯೊಂದನ್ನೂ ಹೊಂದಿಕೊಳ್ಳುವನು. ಬಡವರಿಗೆ ಸಹಾಯ ಮಾಡದವನಿಗೆ ಅನೇಕ ಶಾಪಗಳು ಬರುತ್ತವೆ.

28ಕೆಡುಕನು ಅಧಿಕಾರಕ್ಕೆ ಬಂದರೆ, ಜನರೆಲ್ಲರೂ ಅಡಗಿಕೊಳ್ಳುವರು. ಕೆಡುಕನು ಸೋತುಹೋದಾಗ ಒಳ್ಳೆಯವರು ಮತ್ತೆ ಆಳುವರು.

29 ಪದೇಪದೇ ಎಚ್ಚರಿಸಿದರೂ ಮೊಂಡನಾಗಿರುವವನು ಪಕ್ಕನೆ ನಾಶವಾಗುವನು.

2ಅಧಿಪತಿಯು ಒಳ್ಳೆಯವನಾಗಿರುವಾಗ ಜನರೆಲ್ಲರೂ ಸಂತೋಷವಾಗಿರುವರು. ಕೆಡುಕನು ಆಳುವಾಗ ಜನರೆಲ್ಲರೂ ಸಂಕಟಪಡುವರು.

3ಜ್ಞಾನವನ್ನು ಪ್ರೀತಿಸುವವನ ತಂದೆ ಬಹು ಸಂತೋಷವಾಗಿರುವನು. ಆದರೆ ಸೂಳೆಯರ ಸಹವಾಸ ಮಾಡುವವನು ತನ್ನ ಐಶ್ವರ್ಯವನ್ನು ಕಳೆದುಕೊಳ್ಳುವನು.

4ರಾಜನು ನ್ಯಾಯವಂತನಾಗಿದ್ದರೆ ದೇಶವು ಬಲಿಷ್ಠವಾಗಿರುವುದು. ರಾಜನು ತನ್ನ ಐಶ್ವರ್ಯವನ್ನು ಹೆಚ್ಚಿಸಿಕೊಳ್ಳುವುದಕ್ಕಾಗಿ ವಿಪರೀತ ತೆರಿಗೆಗಳನ್ನು ಹಾಕಿದರೆ, ದೇಶವು ಹಾಳಾಗುವುದು.

5ನೆರೆಯವನ ಮುಖಸುತ್ತಿ ಮಾಡುವವನು ಅವನ ಕಾಲಿಗೆ ಬಲೆಯನ್ನು ಒಡ್ಡುತ್ತಿದ್ದಾನೆ.

6ಕೆಡುಕರು ತಮ್ಮ ಪಾಪದಿಂದಲೇ ಸಿಕ್ಕಿಕೊಳ್ಳುವರು. ಒಳ್ಳೆಯವನಾದರೂ ಸಂತೋಷದಿಂದ ಹಾಡುವನು.

7ನೀತಿವಂತರು ಬಡವರಿಗೆ ಒಳ್ಳೆಯದನ್ನು ಮಾಡಲು ಇಷ್ಟ ಪಡುತ್ತಾರೆ. ಕೆಡುಕರಾದರೊ ಬಡವರನ್ನು ಲಕ್ಷಿಸುವುದಿಲ್ಲ.

8ದುರಾಭಿಮಾನಿಗಳು ಇಡೀ ಪಟ್ಟಣವನ್ನೇ ಬೇಸರಗೊಳಿಸುವರು. ಜ್ಞಾನಿಗಳಾದರೋ ಕೋಪದ ಜ್ವಾಲೆಗಳನ್ನು ನಂದಿಸುವರು.

9ಜ್ಞಾನಿಯು ಮೂಢನೊಂದಿಗೆ ನ್ಯಾಯಾಲಯಕ್ಕೆ ಹೋದರೆ, ಮೂಢನು ಕೇವಲ ಆರ್ಭಟಿಸುವನು; ಹುಚ್ಚುಚ್ಚಾಗಿ ಕೂಗಾಡುವನು; ಅವರಿಗೆ ಪರಿಹಾರ ದೊರೆಯುವುದಿಲ್ಲ.

10ಕೊಲೆಗಾರರು ಯಥಾರ್ಥವಂತರನ್ನು ಯಾವಾಗಲೂ ದ್ವೇಷಿಸುವರು. ಆ ಕೆಡುಕರು ಅವರನ್ನು ಕೊಲ್ಲ ಬಯಸುವರು.

11ಮೂಢನು ತನ್ನ ಕೋಪವನ್ನೆಲ್ಲಾ ವ್ಯಕ್ತಪಡಿಸುವನು; ಆದರೆ ಜ್ಞಾನಿಯು ತನ್ನನ್ನು ಹತೋಟಿಯಲ್ಲಿಟ್ಟುಕೊಳ್ಳುವನು.

12ಅಧಿಪತಿಯು ಸುಳ್ಳುಮಾತುಗಳಿಗೆ ಕಿವಿಗೊಟ್ಟರೆ, ಅವನ ಆಧೀನದಲ್ಲಿರುವ ಅಧಿಕಾರಿಗಳೆಲ್ಲರು ಕೆಡುಕರಾಗುವರು.

13ಒಂದು ರೀತಿಯಲ್ಲಿ, ಬಡವನಿಗೂ ಅವನನ್ನು ಕುಗ್ಗಿಸುವವನಿಗೂ ವ್ಯತ್ಯಾಸವಿಲ್ಲ; ಅವರಿಬ್ಬರಿಗೂ ಜೀವ ಕೊಟ್ಟಾತನು ಯೆಹೋವನೇ; ಅವರಿಬ್ಬರನ್ನು ಸೃಷ್ಟಿ ಮಾಡಿದವನು ಯೆಹೋವನೇ.

14ಬಡಜನರಿಗೆ ನ್ಯಾಯದೊರಕಿಸುವ ರಾಜನು ಬಹುಕಾಲ ಆಳುವನು.

15ಶಿಕ್ಷೆಯು ಮತ್ತು ತಿದ್ದುಪಡಿಯು ಮಕ್ಕಳನ್ನು ಜ್ಞಾನಿಗಳನ್ನಾಗಿ ಮಾಡುತ್ತವೆ. ಶಿಸ್ತುಪಡಿಸಿಲ್ಲದ ಯೌವನಸ್ಥನು ತನ್ನ ತಾಯಿಯನ್ನು ನಾಚಿಕೆಗೆ ಗುರಿಪಡಿಸುತ್ತಾನೆ.

16ಕೆಡುಕರು ದೇಶವನ್ನು ಆಳುತ್ತಿದ್ದರೆ, ಎಲ್ಲೆಲ್ಲೂ ಪಾಪವಿರುವುದು. ಆದರೆ ಒಳ್ಳೆಯವರಿಗೆ ಕೊನೆಯಲ್ಲಿ ಜಯವಾಗುವುದು.

17ನಿನ್ನ ಮಗನನ್ನು ತಿದ್ದಿಸರಿಪಡಿಸು; ಆಗ ನೀನು ಅವನ ಬಗ್ಗೆ ಹೆಮ್ಮೆಯಿಂದಿರುವೆ. ಅವನು ನಿನ್ನನ್ನು ತೃಪ್ತಿಪಡಿಸುವನು.

18ಪ್ರವಾದಿಗಳಿಗೆ ದರ್ಶನವಾಗದಿದ್ದರೆ ಜನರು ಹತೋಟಿ ತಪ್ಪುತ್ತಾರೆ. ಆದರೆ ದೇವರ ಕಟ್ಟಳೆಗೆ ವಿಧೇಯನಾಗಿರುವವನು ಸಂತೋಷವಾಗಿರುವನು.

[19]ನೀನು ಸೇವಕನಿಗೆ ಕೇವಲ ಮಾತಿನಿಂದ ಹೇಳಿದರೆ ಅವನು ಪಾಠವನ್ನು ಕಲಿತುಕೊಳ್ಳುವುದಿಲ್ಲ. ಅವನು ನಿನ್ನ ಮಾತುಗಳನ್ನು ಅರ್ಥಮಾಡಿಕೊಂಡರೂ ವಿಧೇಯನಾಗುವುದಿಲ್ಲ.

[20]ವಿವೇಚಿಸದೆ ಮಾತಾಡುವವನನ್ನು ನೀನು ಕಂಡಿರುವಿಯೋ? ಅವನಿಗಿಂತಲೂ ಮೂಢನಿಗೇ ಹೆಚ್ಚು ನಿರೀಕ್ಷೆಯಿದೆ.

[21]ನೀನು ಚಿಕ್ಕಂದಿನಿಂದಲೇ ಗುಲಾಮನನ್ನು ಕೆಡಿಸಿದರೆ, ಕೊನೆಯಲ್ಲಿ ಅವನು ಮೊಂಡನಾಗಿರುವನು.

[22]ಕೋಪಿಷ್ಠನು ಜಗಳ ಎಬ್ಬಿಸುವನು. ಉದ್ರೇಕಗೊಂಡವನು ಅನೇಕ ಪಾಪಗಳನ್ನು ಮಾಡುವನು.

[23]ದುರಾಭಿಮಾನಿಯನ್ನು ಅವನ ದುರಾಭಿಮಾನವೇ ನಾಶಪಡಿಸುವುದು. ಆದರೆ ದೀನನನ್ನು ಬೇರೆ ಜನರು ಗೌರವಿಸುವರು.

[24]ಕಳ್ಳನ ಸಂಗಡಿಗನು ತನಗೆ ತಾನೆ ಕಡುವೈರಿ. ಸಾಕ್ಷಿ ಹೇಳದ ಜನರಿಗೆ ಬರತಕ್ಕ ಶಾಪದ ಬಗ್ಗೆ ಕೇಳಿದರೂ ಅವನು ಹೇಳುವುದಿಲ್ಲ.

[25]ಮನುಷ್ಯರ ಭಯ ಉರುಲಾಗಬಹುದು. ಆದರೆ ಯೆಹೋವನ ಮೇಲಿರುವ ಭರವಸೆ ಕ್ಷೇಮವಾಗಿಡುವುದು.

[26]ಅನೇಕರು ಅಧಿಪತಿಯಿಂದ ಸಹಾಯ ಬಯಸುವರು. ಆದರೆ ನ್ಯಾಯ ದೊರೆಯುವುದು ಯೆಹೋವನಿಂದಲೇ.
[27]ಒಳ್ಳೆಯವರಿಗೆ ಯಥಾರ್ಥರಲ್ಲದವರು ಅಸಹ್ಯ. ಕೆಡುಕರು ಯಥಾರ್ಥರನ್ನು ದ್ವೇಷಿಸುವರು.

### ಯಾಕೆಯ ಮಗನಾದ ಅಗೂರನ ಜ್ಞಾನೋಕ್ತಿಗಳು

30 ಮಾಸ್ಸಾದ ಯಾಕೆ ಎಂಬವನ ಮಗನಾದ ಅಗೂರನ ನುಡಿಗಳಿವು. ಇಥಿಯೇಲನಿಗೂ ಉಕ್ಕಾಲನಿಗೂ ಇವನು ನೀಡಿದ ಸಂದೇಶವಿದು:

[2]ನಾನು ಬೇರೆಯವರಿಗಿಂತ ದಡ್ಡನಾಗಿರುವೆ. ಸರ್ವಸಾಮಾನ್ಯವಾದ ಬುದ್ಧಿಯೂ ನನಗಿಲ್ಲ.
[3]ನಾನು ಜ್ಞಾನವನ್ನು ಕಲಿತವನಲ್ಲ; ಪರಿಶುದ್ಧನಾದ ದೇವರ ಬಗ್ಗೆಯೂ ಗೊತ್ತಿಲ್ಲ.

[4]ಎಂದಾದರೂ ಪರಲೋಕಕ್ಕೆ ಏರಿಹೋಗಿ ಇಳಿದು ಬಂದವನು ಯಾರು? ಗಾಳಿಯನ್ನು ತನ್ನ ಕೈಯಲ್ಲಿ ಹಿಡಿದವನು ಯಾರು? ತನ್ನ ಉಡುಪಿನಲ್ಲಿ ಸಮುದ್ರವನ್ನು ಮೂಟೆಕಟ್ಟಿದವನು ಯಾರು? ಭೂಮಿಗೆ ಮೇರೆಗಳನ್ನು ಹಾಕಿದವನು ಯಾರು? ಈ ಕಾರ್ಯಗಳನ್ನು ಯಾವನಾದರೂ ಮಾಡಿದ್ದರೆ, ಅವನು ಯಾರು? ಅವನ ಕುಟುಂಬ ಎಲ್ಲಿದೆ?

[5]ದೇವರು ಹೇಳುವ ಪ್ರತಿಯೊಂದು ಮಾತೂ ನಂಬಿಕೆಗೆ ಯೋಗ್ಯವಾಗಿದೆ. ತನ್ನ ಬಳಿಗೆ ಬರುವ ಜನರಿಗೆ ದೇವರು ಆಶ್ರಯದುರ್ಗವಾಗಿದ್ದಾನೆ.
[6]ಆದ್ದರಿಂದ ದೇವರು ಹೇಳುವ ಸಂಗತಿಗಳಿಗೆ ಏನನ್ನೂ ಸೇರಿಸಬೇಡ. ನೀನು ಬದಲಾಯಿಸಿದರೆ, ಆತನು ನಿನ್ನನ್ನು ಶಿಕ್ಷಿಸುವನು ಮತ್ತು ನಿನ್ನನ್ನು ಸುಳ್ಳುಗಾರನೆಂದು ರುಜುವಾತು ಮಾಡುವನು.

[7]ಯೆಹೋವನೇ, ನಾನು ಸಾಯುವ ಮೊದಲು ನೀನು ನನಗೋಸ್ಕರ ಎರಡು ಕಾರ್ಯಗಳನ್ನು ಮಾಡಬೇಕೆಂದು ನಿನ್ನನ್ನು ಕೇಳಿಕೊಳ್ಳುವೆ.
[8]ಸುಳ್ಳುಹೇಳದಂತೆ ನನಗೆ ಸಹಾಯ ಮಾಡು. ನನ್ನನ್ನು ತುಂಬ ಐಶ್ವರ್ಯವಂತನನ್ನಾಗಿಯೂ ಮಾಡಬೇಡ; ತುಂಬ ಬಡವನನ್ನಾಗಿಯೂ ಮಾಡಬೇಡ; ಅನುದಿನಕ್ಕೆ ಬೇಕಾದವುಗಳನ್ನು ಮಾತ್ರ ಕೊಡು.
[9]ನನಗೆ ಹೆಚ್ಚಾಗಿದ್ದರೆ, ನಿನ್ನನ್ನೇ ತಿರಸ್ಕರಿಸಿ, ‘‘ನನಗೆ ಯೆಹೋವನ ಅಗತ್ಯವಿಲ್ಲ’’ ಎಂದು ಹೇಳುವೆನು. ನಾನು ಬಡವನಾಗಿದ್ದರೆ, ಕಳವುಮಾಡಿ ನಿನ್ನ ಹೆಸರಿಗೆ ಅವಮಾನಮಾಡುವೆನು.

[10]ಸೇವಕನ ಬಗ್ಗೆ ಯಜಮಾನನಿಗೆ ಚಾಡಿಹೇಳಬೇಡ. ನೀನು ಹೇಳಿದರೆ, ಅವನು ನಿನ್ನನ್ನು ಶಪಿಸುವನು; ಆ ಶಾಪದಿಂದ ನೀನು ಸಂಕಟಪಡುವೆ.

[11]ಕೆಲವರು ತಮ್ಮ ತಂದೆಗಳನ್ನು ಶಪಿಸುವರು. ತಮ್ಮ ತಾಯಂದಿರನ್ನು ಆಶೀರ್ವದಿಸುವುದಿಲ್ಲ.

[12]ಕೆಲವರು ತಮ್ಮನ್ನು ಶುದ್ಧರೆಂದು ಯೋಚಿಸುವರು. ಆದರೆ ಅವರು ತಮ್ಮ ಹೊಲಸಿನಿಂದ ಶುದ್ಧೀಕರಿಸಲ್ಪಟ್ಟಿಲ್ಲ.

[13]ಕೆಲವರು ಬಹಳ ದುರಾಭಿಮಾನಿಗಳಾಗಿದ್ದಾರೆ. ತಾವು ಬೇರೆಯವರಿಗಿಂತ ಎಷ್ಟೋ ಉತ್ತಮರೆಂಬುದು ಅವರ ಭಾವನೆ.
[14]ಖಡ್ಗಗಳಂತಿರುವ ಹಲ್ಲುಗಳನ್ನು ಹೊಂದಿರುವ ಜನರಿದ್ದಾರೆ. ಅವರ ಕೋರೆಗಳು ಕತ್ತಿಗಳಂತಿವೆ. ಅವರು ಬಡಜನರಲ್ಲಿ ಇರುವುದನ್ನೆಲ್ಲಾ ತಮ್ಮಿಂದಾದಷ್ಟು ದೋಚಿಕೊಳ್ಳಲು ತಮ್ಮ ಸಮಯವನ್ನು ಉಪಯೋಗಿಸುವರು.

[15]ಕೆಲವರು ರಕ್ತಕುಡಿಯುವ ಜಿಗಣೆಗಳಂತಿದ್ದಾರೆ. ಅವರು, ‘‘ನನಗೆ ಕೊಡು, ನನಗೆ ಕೊಡು, ನನಗೆ ಕೊಡು’’ ಎಂದು ಹೇಳುತ್ತಾರೆ. ಎಂದಿಗೂ ತೃಪ್ತಿಯಾಗದ ಮೂರು ಸಂಗತಿಗಳಿವೆ. ನಿಜವಾಗಿಯೂ ನಾಲ್ಕು ಸಂಗತಿಗಳು ಎಂದಿಗೂ ಸಾಕು ಎನ್ನವು:
[16]ಮರಣದ ಸ್ಥಳ, ಮಕ್ಕಳಿಲ್ಲದ ಹೆಂಗಸು, ಸತತವಾಗಿ ನೀರಿನ ಅಗತ್ಯವಿರುವ ಭೂಮಿ ಮತ್ತು ಆರದ ಬೆಂಕಿ!

[17]ತನ್ನ ತಂದೆಯನ್ನು ಗೇಲಿಮಾಡುವವನಾಗಲೀ ವೃದ್ಧ ತಾಯಿಯನ್ನು ಕಡೆಗಣಿಸುವವನಾಗಲೀ ದಂಡನೆ ಹೊಂದುವನು. ಕಾಗೆಗಳೂ ಕ್ರೂರಪಕ್ಷಿಗಳೂ ಅವನ ಕಣ್ಣುಗಳನ್ನು ತಿನ್ನುವಂತಿರುವುದು ಆ ದಂಡನೆ.

[18]ನನಗೆ ಅರ್ಥಮಾಡಿಕೊಳ್ಳಲು ಕಷ್ಟವಾದ ಮೂರು ಸಂಗತಿಗಳಿವೆ; ನಿಜವಾಗಿಯೂ ನಾಲ್ಕು ಸಂಗತಿಗಳನ್ನು ನಾನು ಅರ್ಥಮಾಡಿಕೊಳ್ಳಲಾರೆ:
[19]ಆಕಾಶದಲ್ಲಿ ಹಾರುವ ಹದ್ದಿನ ರೀತಿ, ಬಂಡೆಯ ಮೇಲೆ ಹರಿದಾಡುವ ಹಾವು, ಸಮುದ್ರದ ಮೇಲೆ ಸಂಚರಿಸುವ ಹಡಗು ಮತ್ತು ಹೆಂಗಸನ್ನು ಪ್ರೇಮಿಸುತ್ತಿರುವ ಗಂಡಸು.
[20]ವ್ಯಭಿಚಾರಿಣಿಯ

ನಡತೆಯು ಇದೇ. ಆಕೆ ಊಟ ಮಾಡುವಳು, ಬಾಯಿ
ಒರಸಿಕೊಳ್ಳುವಳು ಮತ್ತು ತಾನು ಯಾವ ತಪ್ಪನ್ನೂ
ಮಾಡಿಲ್ಲವೆಂದು ಹೇಳುವಳು. 21ಭೂಮಿಯ ಮೇಲೆ
ಕೇಡುಮಾಡುವ ಮೂರು ಸಂಗತಿಗಳಿವೆ; ನಿಜವಾಗಿಯೂ
ನಾಲ್ಕು ಸಂಗತಿಗಳನ್ನು ಭೂಮಿಯು ತಾಳಲಾಗದು:

22ರಾಜನಾದ ಸೇವಕ, ತನಗೆ ಅಗತ್ಯವಿರುವ ಪ್ರತಿ
ಯೊಂದನ್ನು ಪಡೆದಿರುವ ಮೂಢ, 23ಪ್ರೀತಿಯನ್ನು
ಕಂಡಿಲ್ಲದಿದ್ದರೂ ಮದುವೆಯಾಗುವ ಸ್ತ್ರೀ ಮತ್ತು ತನ್ನ
ಯಜಮಾನಿಯ ಸ್ಥಾನವನ್ನು ಕಸಿದುಕೊಳ್ಳುವ ಸೇವಕಿ.

24ಭೂಮಿಯ ಮೇಲೆ ನಾಲ್ಕು ಪ್ರಾಣಿಗಳಿವೆ. ಆದರೆ ಈ
ಪ್ರಾಣಿಗಳು ತುಂಬ ವಿವೇಕವುಳ್ಳವುಗಳಾಗಿವೆ.

25 ಇರುವೆಗಳು ಸಣ್ಣಗಿವೆ ಮತ್ತು ಬಲಹೀನವಾಗಿವೆ.
ಆದರೆ ಅವು ಸುಗ್ಗೀಕಾಲದಲ್ಲಿ ತಮ್ಮ ಆಹಾರವನ್ನು
ಕೂಡಿಸಿಟ್ಟುಕೊಳ್ಳುತ್ತವೆ.
26 ಬೆಟ್ಟದ ಮೊಲ ಬಲಿಷ್ಠವಾದ ಪ್ರಾಣಿಯಾಗಿಲ್ಲ
ದಿದ್ದರೂ ಅವು ಬಂಡೆಗಳಲ್ಲಿ ತಮಗೆ ಮನೆಗಳನ್ನು
ಮಾಡಿಕೊಳ್ಳಬಲ್ಲವು.
27 ಮಿಡತೆಗಳಿಗೆ ರಾಜನಿಲ್ಲದಿದ್ದರೂ ಅವು ಗುಂಪು
ಗುಂಪಾಗಿ ಹೋಗುತ್ತವೆ.
28 ಹಲ್ಲಿಗಳನ್ನು ನಿಮ್ಮ ಕೈಗಳಲ್ಲಿ ಹಿಡಿದುಕೊಳ್ಳ
ಬಹುದು. ಅವು ಅಷ್ಟುಸಣ್ಣವು. ಆದರೆ ಅವು ರಾಜನ
ಮನೆಗಳಲ್ಲಿಯೂ ವಾಸಿಸುತ್ತವೆ.

29ಮೂರು ಪ್ರಾಣಿಗಳಿವೆ: ಅವು ನಡೆಯುವಾಗ ಗಂಭೀ
ರತೆಯು ಎದ್ದುಕಾಣುತ್ತದೆ. ನಿಜವಾಗಿಯೂ ನಾಲ್ಕು ಇವೆ:

30 ಸಿಂಹವು ಎಲ್ಲಾ ಪ್ರಾಣಿಗಳಲ್ಲಿ ಅತಿ ಬಲಿಷ್ಠವಾ
ದದ್ದು; ಅದು ಯಾವುದಕ್ಕೂ ಭಯಪಡುವುದಿಲ್ಲ.
31 ಬಹು ಹೆಮ್ಮೆಯಿಂದ ನಡೆಯುವ ಬೇಟೆನಾಯಿ;
ಹೋತ ಮತ್ತು ತನ್ನ ಜನರ ನಡುವೆ ಇರುವ ರಾಜ.

32ನೀನು ನಿನ್ನನ್ನು ಹೆಚ್ಚಿಸಿಕೊಂಡು ಮೂಢನಾಗಿದ್ದರೆ,
ಕೆಡುಕನ್ನು ಆಲೋಚಿಸುತ್ತಿದ್ದರೆ, ಸ್ವಲ್ಪ ಯೋಚಿಸು.

33ಹಾಲನ್ನು ಕಡೆಯುವವನು ಬೆಣ್ಣೆಮಾಡುವನು.
ಮತ್ತೊಬ್ಬನ ಮೂಗನ್ನು ಹೊಡೆದರೆ ರಕ್ತ ಬರುವುದು.
ಅಂತೆಯೇ, ನೀನು ಜನರನ್ನು ಕೋಪಗೊಳಿಸಿದರೆ,
ಜಗಳವನ್ನು ಎಬ್ಬಿಸುವೆ.

## ಮಸ್ಸಾದ ಲೆಮೂವೇಲನ ಜ್ಞಾನೋಕ್ತಿಗಳಿವು

31 ಇವು ರಾಜನಾದ ಲೆಮೂವೇಲನ ಜ್ಞಾನದ
ನುಡಿಗಳು. ಅವನ ತಾಯಿಯು ಅವನಿಗೆ
ಇವುಗಳನ್ನು ಉಪದೇಶಿಸಿದಳು.

2ನೀನು ನನ್ನ ಮಗನು: ನನ್ನ ಪ್ರಿಯ ಮಗನು: ನಾನು
ಪ್ರಾರ್ಥಿಸಿ ಪಡೆದುಕೊಂಡ ಮಗನು ನೀನೇ. 3ನಿನ್ನ
ಶಕ್ತಿಯನ್ನು ಹೆಂಗಸರಲ್ಲಿ ವ್ಯರ್ಥಮಾಡಿಕೊಳ್ಳಬೇಡ.
ರಾಜನನ್ನು ನಾಶ ಮಾಡುವವರು ಹೆಂಗಸರುಗಳೇ.
ನಿನ್ನನ್ನು ಅವರಲ್ಲಿ ಹಾಳು ಮಾಡಿಕೊಳ್ಳಬೇಡ.
4ಲೆಮೂವೇಲನೇ, ರಾಜರುಗಳು ಮದ್ಯವನ್ನು ಕುಡಿಯು
ವುದು ಒಳ್ಳೆಯದಲ್ಲ. ಮದ್ಯಪಾನ ಆಳುವವರಿಗೆ ಒಳ್ಳೆಯ
ದಲ್ಲ. 5ಅವರು ಅತಿಯಾಗಿ ಕುಡಿದು ಕಟ್ಟಳೆಗಳನ್ನು
ಮರೆತು ಬಡವರ ಹಕ್ಕುಗಳನ್ನೆಲ್ಲ ರದ್ದುಮಾಡುವರು.
6ಸಾಯುವವರಿಗೆ ಮದ್ಯವನ್ನು ಕೊಡು. ವ್ಯಥೆಯಲ್ಲಿರು
ವವರಿಗೆ ಮದ್ಯವನ್ನು ಕೊಡು. 7ಆಗ ಅವರು ಕುಡಿದು,
ತಮ್ಮ ಬಡತನವನ್ನು ಮರೆತು ಬಿಡುವರು, ಅವರು
ಕುಡಿದು ತಮ್ಮ ಕಷ್ಟಗಳನ್ನೆಲ್ಲಾ ಮರೆತು ಬಿಡುವರು.

8ತಮಗೋಸ್ಕರ ಮಾತಾಡಲಾರದ ಜನರಿಗೋಸ್ಕರ
ಮಾತಾಡು. ಕಷ್ಟದಲ್ಲಿರುವ ಜನರೆಲ್ಲರ ಹಕ್ಕುಗಳಿಗಾಗಿ
ಮಾತಾಡು. 9ಸತ್ಯವಾದವುಗಳ ಪರವಾಗಿ ನಿಂತುಕೋ.
ಜನರಿಗೆಲ್ಲಾ ನ್ಯಾಯವಾದ ತೀರ್ಪನ್ನು ಮಾಡು. ಬಡ
ಜನರ ಮತ್ತು ಕೊರತೆಯಲ್ಲಿರುವವರ ಹಕ್ಕುಗಳನ್ನು
ಕಾಪಾಡು.

## ಯೋಗ್ಯಳಾದ ಹೆಂಡತಿ

10 ''ಒಳ್ಳೆಯ ಹೆಂಡತಿ'' ಯನ್ನು ಪಡೆದುಕೊಳ್ಳುವುದು
ತುಂಬಾ ಕಷ್ಟ. ಅವಳು ಆಭರಣಕ್ಕಿಂತಲೂ ಹೆಚ್ಚು
ಬೆಲೆಬಾಳುವಳು.
11 ಗಂಡನ ನಂಬಿಕೆಗೆ ಆಕೆ ಪಾತ್ರಳು. ಆಕೆಯ ಗಂಡ
ಬಡವನಾಗುವುದೇ ಇಲ್ಲ.
12 ಒಳ್ಳೆಯ ಹೆಂಡತಿ ತನ್ನ ಗಂಡನಿಗೆ ತನ್ನ ಜೀವಮಾನ
ವೆಲ್ಲಾ ಒಳ್ಳೆಯದನ್ನು ಮಾಡುವಳು. ಆಕೆ ಅವನಿ
ಗೆಂದಿಗೂ ತೊಂದರೆ ಮಾಡುವುದಿಲ್ಲ.
13 ಅವಳು ಬಟ್ಟೆ ತಯಾರಿಸಲು ಉಣ್ಣೆಯನ್ನು
ಮತ್ತು ಸೆಣಬಿನ ನಾರನ್ನು ಯಾವಾಗಲೂ
ಶೇಖರಿಸುವಳು.
14 ಸಂತೋಷದಿಂದ ಕೈಯಾರೆ ಕೆಲಸ ಮಾಡುವಳು.
15 ಮುಂಜಾನೆ ಮೊಬ್ಬಿರುವಾಗಲೇ ಆಕೆ ಎದ್ದೇಳು
ವಳು. ಆಕೆ ತನ್ನ ಕುಟುಂಬದವರಿಗೂ ತನ್ನ ಸೇವಕಿ
ಯರಿಗೂ ಊಟ ಕೊಡುವಳು.
16 ಆಕೆ ಜಮೀನನ್ನು ಕೊಂಡುಕೊಳ್ಳುವಳು; ತಾನು
ಗಳಿಸಿದ ಹಣವನ್ನು ದ್ರಾಕ್ಷಿತೋಟಕ್ಕೆ ಉಪ
ಯೋಗಿಸುವಳು.
17 ಆಕೆ ತುಂಬ ಕಷ್ಟಪಟ್ಟು ಕೆಲಸಮಾಡುವಳು. ಆಕೆ
ಬಲವಾಗಿದ್ದಾಳೆ; ತನ್ನ ಕೆಲಸಗಳನ್ನೆಲ್ಲಾ ಮಾಡಲು
ಶಕ್ತಳಾಗಿದ್ದಾಳೆ.

18 ಆಕೆ ತಾನು ತಯಾರಿಸಿದ ವಸ್ತುಗಳನ್ನು ಒಳ್ಳೆಯ ಲಾಭಕ್ಕೆ ಮಾರುವಳು, ರಾತ್ರಿ ಬಹು ಹೊತ್ತಿನ ವರೆಗೂ ಆಕೆ ಕೆಲಸ ಮಾಡುವಳು.

19 ಆಕೆ ತಾನೇ ದಾರವನ್ನು ತಯಾರಿಸುವಳು; ತಾನೇ ಬಟ್ಟೆಯನ್ನು ನೇಯುವಳು.

20 ಆಕೆ ಯಾವಾಗಲೂ ಬಡವರಿಗೆ ಕೊಡುವಳು; ಕೊರತೆಯಲ್ಲಿರುವ ಜನರಿಗೆ ಸಹಾಯ ಮಾಡುವಳು.

21 ಹಿಮಸುರಿಯುವಾಗ, ಆಕೆ ತನ್ನ ಕುಟುಂಬದ ಬಗ್ಗೆ ಚಿಂತಿಸಬೇಕಿಲ್ಲ; ಆಕೆ ಅವರೆಲ್ಲರಿಗೆ ಬೆಚ್ಚಗಿರುವ ಬಟ್ಟೆಗಳನ್ನು ಕೊಟ್ಟಿದ್ದಾಳೆ.

22 ಆಕೆ ಹೊದಿಕೆಗಳನ್ನು ತಯಾರಿಸುವಳು. ಆಕೆಯು ಶ್ರೇಷ್ಠವಾದ ನಾರಗಸೆಯ ದಾರದಿಂದ ಮಾಡಿದ ಬಟ್ಟೆಗಳನ್ನು ಧರಿಸಿಕೊಳ್ಳುವಳು.

23 ಜನರು ಆಕೆಯ ಗಂಡನನ್ನು ಗೌರವಿಸುವರು. ಅವನು ದೇಶದ ಹಿರಿಯರುಗಳಲ್ಲಿ ಒಬ್ಬ ನಾಗಿರುವನು.

24 ಆಕೆ ಒಳ್ಳೆಯ ವ್ಯಾಪಾರ ಮಾಡುವಳು; ಉಡುಪು ಗಳನ್ನೂ ನಡುಪಟ್ಟಿಗಳನ್ನೂ ತಯಾರಿಸಿ ಮಾರುವಳು.

25 ಆಕೆಯು ಶಕ್ತಿಯನ್ನೂ ಗಾಂಭೀರ್ಯವನ್ನೂ ಪ್ರದರ್ಶಿಸುವಳು; ಹರ್ಷದಿಂದ ಭವಿಷ್ಯತ್ತನ್ನು ಎದುರುನೋಡುವಳು.

26 ಆಕೆಯು ಜ್ಞಾನದಿಂದ ಮಾತಾಡುವಳು; ಪ್ರೀತಿ ಯಿಂದ ಸದುಪದೇಶ ಮಾಡುವಳು.

27 ಆಕೆಯು ಚಟುವಟಿಕೆಯಿಂದಿದ್ದು ಗೃಹ ಕೃತ್ಯಗ ಳನ್ನೆಲ್ಲಾ ನೋಡಿಕೊಳ್ಳುವಳು.

28 ಮಕ್ಕಳು ಎದ್ದುನಿಂತು ಆಕೆಯನ್ನು ಅಭಿನಂದಿಸು ವರು. ಗಂಡನು ಅವಳನ್ನು ಹೊಗಳುವನು.

29 ‘‘ಅನೇಕ ಹೆಂಗಸರು ಮೆಚ್ಚಿಕೆಗೆ ಪಾತ್ರವಾದ ಕಾರ್ಯಗಳನ್ನು ಮಾಡಿದ್ದಾರೆ. ಆದರೆ ನೀನು ಅವರೆಲ್ಲರಲ್ಲಿ ಉತ್ತಮಳು’’ ಎಂದು ಆಕೆಯ ಗಂಡನು ಹೊಗಳುವನು.

30 ಲಾವಣ್ಯ ನಿನ್ನನ್ನು ಮೋಸಗೊಳಿಸಬಲ್ಲದು; ಸೌಂದರ್ಯ ತಾತ್ಕಾಲಿಕವಾದದ್ದು. ಆದರೆ ಯೆಹೋವನಲ್ಲಿ ಭಯಭಕ್ತಿಯುಳ್ಳ ಹೆಂಗಸು ಹೊಗಳಿಕೆಗೆ ಯೋಗ್ಯಳು.

31 ಆಕೆ ತನಗೆ ಯೋಗ್ಯವಾದ ಪ್ರತಿಫಲವನ್ನು ಹೊಂದ ಬೇಕು. ಆಕೆಯ ಕಾರ್ಯಗಳಿಗಾಗಿ ಜನರೆಲ್ಲರು ಆಕೆಯನ್ನು ಬಹಿರಂಗವಾಗಿ ಸನ್ಮಾನಿಸಬೇಕು.

# ಪ್ರಸಂಗಿ

1 ದಾವೀದನ ಮಗನೂ ಜೆರುಸಲೇಮಿನಲ್ಲಿ ಆಳುತ್ತಿದ್ದ
ರಾಜನೂ ಆಗಿದ್ದ ಪ್ರಸಂಗಿಯ ಮಾತುಗಳು.
ಪ್ರಸಂಗಿಯು ಹೇಳುವುದೇನೆಂದರೆ, 2ವ್ಯರ್ಥವೇ ವ್ಯರ್ಥ,
ವ್ಯರ್ಥವೇ ವ್ಯರ್ಥ, ಸಮಸ್ತವೂ ವ್ಯರ್ಥ! 3ಈ ಲೋಕದಲ್ಲಿ
ಮನುಷ್ಯರು ಪಡುವ ಪ್ರಯಾಸದಿಂದ ಅವರಿಗೇನು
ಲಾಭ?

## ಪ್ರಕೃತಿಯಲ್ಲಿ ಬದಲೇನೂ ಇಲ್ಲ

4ಒಂದು ತಲೆಮಾರು ಹೋಗಿ ಮತ್ತೊಂದು ತಲೆಮಾರು
ಬರುವುದು. ಆದರೆ ಭೂಮಿ ಎಂದೆಂದಿಗೂ ಮುಂದುವರಿ
ಯುವುದು. 5ಸೂರ್ಯನು ಏರುವನು ಮತ್ತು ಇಳಿಯು
ವನು; ಬಳಿಕ ಅದೇ ಸ್ಥಳದಲ್ಲಿ ಮತ್ತೆ ಏರಲು ಅವಸರ
ಪಡುವನು.

6ಗಾಳಿಯು ದಕ್ಷಿಣಕ್ಕೆ ಬೀಸುವುದು; ನಂತರ ಉತ್ತರಕ್ಕೆ
ತಿರುಗಿಕೊಳ್ಳುವುದು; ಅದು ತಿರುತಿರುಗುತ್ತಾ ಹೋಗಿ
ತಿರುತಿರುಗುತ್ತಾ ಬರುವುದು.

7ನದಿಗಳೆಲ್ಲಾ ಸಮುದ್ರಕ್ಕೆ ಹರಿದು ಹೋಗುತ್ತಲೇ
ಇರುತ್ತವೆ; ಆದರೂ ಸಮುದ್ರವು ತುಂಬುವುದಿಲ್ಲ.

8ಮಾತುಗಳಿಂದ ಯಾವುದನ್ನೂ ಸಂಪೂರ್ಣವಾಗಿ
ವಿವರಿಸಲು ಸಾಧ್ಯವಿಲ್ಲ; ಆದರೂ ಜನರು ಮಾತಾಡು
ತ್ತಲೇ ಇರುವರು. ನಮ್ಮ ಕಿವಿಗಳು ಮಾತುಗಳನ್ನು
ಕೇಳುತ್ತಲೇ ಇರುತ್ತವೆ; ಆದರೂ ನಮ್ಮ ಕಿವಿಗಳು
ತುಂಬುವುದಿಲ್ಲ. ನಮ್ಮ ಕಣ್ಣುಗಳು ನೋಡುತ್ತಲೇ ಇರು
ತ್ತವೆ; ಆದರೂ ಅವು ತುಂಬುವುದಿಲ್ಲ.

## ಲೋಕದಲ್ಲಿ ಹೊಸದೇನೂ ಇಲ್ಲ

9ಇದ್ದದ್ದೇ ಇರುವುದು; ನಡೆದದ್ದೇ ನಡೆಯುವುದು.
ಲೋಕದಲ್ಲಿ ಹೊಸದೇನೂ ಇಲ್ಲ.

10‘‘ಇಗೋ, ಇದು ಹೊಸದು!’’ ಎಂದು ಒಬ್ಬನು ಹೇಳ
ಬಹುದು. ಆದರೆ ಅದು ಸಹ ಮೊದಲಿಂದ ಇಲ್ಲಿ ಇದ್ದದ್ದೇ.
ನಮಗಿಂತ ಮೊದಲೇ ಅದು ಇಲ್ಲಿತ್ತು.

11ಬಹುಕಾಲದ ಹಿಂದಿನ ಘಟನೆಗಳನ್ನು ಜನರು
ಜ್ಞಾಪಿಸಿಕೊಳ್ಳುವುದಿಲ್ಲ. ಈಗ ನಡೆಯುತ್ತಿರುವ ಸಂಗತಿ
ಗಳನ್ನು ಮುಂದಿನ ಕಾಲದ ಜನರು ಜ್ಞಾಪಿಸಿಕೊಳ್ಳುವು
ದಿಲ್ಲ, ಹೀಗೆ, ತಮಗಿಂತ ಮುಂಚೆ ಇದ್ದವರು ಮಾಡಿದ್ದನ್ನು
ಜನರು ಜ್ಞಾಪಿಸಿಕೊಳ್ಳುವುದಿಲ್ಲ.

## ಜ್ಞಾನದಿಂದ ಸಂತೋಷವಾಗುವುದೇ?

12ಪ್ರಸಂಗಿಯಾದ ನಾನು ಜೆರುಸಲೇಮಿನಲ್ಲಿ ಇಸ್ರೇಲ
ರಿಗೆ ರಾಜನಾಗಿದ್ದೆನು. 13ಈ ಜೀವಿತದ ಎಲ್ಲಾ ವಿಷಯ
ಗಳನ್ನು ಜ್ಞಾನದಿಂದ ವಿಮರ್ಶಿಸಿ ಕಲಿತುಕೊಳ್ಳಲು ನಿರ್ಧರಿ
ಸಿದೆನು. ದೇವರು ಮನುಷ್ಯರಿಗೆ ಕೊಟ್ಟಿರುವ ಕೆಲಸವೆಲ್ಲ
ಬಹು ಪ್ರಯಾಸವೇ. 14ಈ ಲೋಕದ ಕೆಲಸಗಳನ್ನೆಲ್ಲ
ನೋಡಿದಾಗ ಅವೆಲ್ಲ ಕೇವಲ ವ್ಯರ್ಥವೆಂದು ಕಂಡು
ಕೊಂಡೆನು. ಅವು ಗಾಳಿಯನ್ನು ಹಿಡಿಯಲು ಪ್ರಯತ್ನಿ
ಸಿದಷ್ಟೇ ವ್ಯರ್ಥವಾಗಿವೆ. 15ವಕ್ರವಾದದ್ದನ್ನು ನೆಟ್ಟಗೆ
ಮಾಡಲು ಸಾಧ್ಯವಿಲ್ಲ. ಇಲ್ಲದ್ದನ್ನು ಲೆಕ್ಕಿಸುವುದಕ್ಕೂ
ಸಾಧ್ಯವಿಲ್ಲ.

16ನಾನು ಮನಸ್ಸಿನಲ್ಲಿ, ‘‘ನಾನು ಬಹು ಜ್ಞಾನಿ. ನನಗಿಂತ
ಮೊದಲು ಜೆರುಸಲೇಮನ್ನು ಆಳಿದ ಎಲ್ಲಾ ರಾಜರು
ಗಳಿಗಿಂತ ನಾನು ಜ್ಞಾನಿ. ನಾನು ಜ್ಞಾನವನ್ನೂ ವಿವೇಕ
ವನ್ನೂ ಚೆನ್ನಾಗಿ ತಿಳಿದುಕೊಂಡಿರುವೆ’’ ಎಂದು
ಕೊಂಡೆನು.

17ಜ್ಞಾನವನ್ನಲ್ಲದೆ ಮೂಢತನವನ್ನೂ ಬುದ್ಧಿಹೀನತೆ
ಯನ್ನೂ ಗ್ರಹಿಸಿಕೊಳ್ಳಲು ನಿರ್ಧರಿಸಿದೆನು. ಆದರೆ ಇದು
ಸಹ ಗಾಳಿಯನ್ನು ಹಿಂದಟ್ಟಿದ ಹಾಗೆ ವ್ಯರ್ಥವೆಂದು
ಕಲಿತುಕೊಂಡೆನು. 18ಬಹು ಜ್ಞಾನದಿಂದ ಬಹು ಸಂಕಟ ;
ಹೆಚ್ಚು ತಿಳುವಳಿಕೆಯಿಂದ ಹೆಚ್ಚು ದುಃಖ.

## ‘‘ಸುಖವು’’ ನೀತಿಮಾರ್ಗಕ್ಕೆ ನಡೆಸುವುದೇ?

2 ನಾನು ನನ್ನ ಹೃದಯದಲ್ಲಿ, ‘‘ಬಾ, ನಿನ್ನನ್ನು ಸುಖದ
ಮೂಲಕ ಪರೀಕ್ಷಿಸುವೆನು; ಆಗ ನೀನು ನೀತಿ
ಮಾರ್ಗವನ್ನು ಕಲಿತುಕೊಳ್ಳುವೆ’’ ಎಂದುಕೊಂಡೆನು.
ಆದರೆ ಇದು ಸಹ ವ್ಯರ್ಥವೆಂದು ಕಂಡುಕೊಂಡೆನು.
2ನಗೆಯು ಹುಚ್ಚುತನ. ಸುಖದಿಂದ ಪ್ರಯೋಜನವೇನು?
ಅಂದುಕೊಂಡೆನು. 3ಮನುಷ್ಯರು ತಮ್ಮ ಕ್ಷಣಿಕ

ಜೀವಮಾನದಲ್ಲಿ ಮಾಡತಕ್ಕ ಒಳ್ಳೆಯದನ್ನು ತಿಳಿದುಕೊಳ್ಳ
ಬೇಕೆಂದು ನನ್ನ ಮನಸ್ಸನ್ನು ಜ್ಞಾನದಿಂದ ತುಂಬಿಸಿದೆ;
ದೇಹವನ್ನು ದ್ರಾಕ್ಷಾರಸದಿಂದ ತುಂಬಿಸಿದೆ; ಮೂಢ
ತನವನ್ನು ಅವಲಂಭಿಸಿಕೊಂಡೆ.

### ದುಡಿಮೆಯಿಂದ ಸಂತೋಷವಾಗುವುದೇ?

4ದೊಡ್ಡ ಕಾರ್ಯಗಳನ್ನು ಮಾಡಲಾರಂಭಿಸಿದೆ; ನನ
ಗೋಸ್ಕರ ಮನೆಗಳನ್ನು ಕಟ್ಟಿಸಿದೆ; ದ್ರಾಕ್ಷಾ ತೋಟಗಳನ್ನು
ಮಾಡಿಸಿದೆ; 5ತೋಟಗಳನ್ನೂ ಉದ್ಯಾನವನಗಳನ್ನೂ
ಮಾಡಿಸಿದೆ; ಎಲ್ಲಾ ಬಗೆಯ ಹಣ್ಣಿನ ಮರಗಳನ್ನು ನೆಡಿಸಿದೆ.
6ನೀರಿನ ಕೊಳಗಳನ್ನು ಮಾಡಿಸಿ ಮರಗಳಿಗೆ ನೀರನ್ನು
ಹಾಯಿಸಿದೆ. 7ಪುರುಷರನ್ನೂ ಸ್ತ್ರೀಯರನ್ನೂ ಗುಲಾಮ
ರನ್ನಾಗಿ ಕೊಂಡುಕೊಂಡೆ. ನನ್ನ ಮನೆಯಲ್ಲೇ ಹುಟ್ಟಿದ
ಗುಲಾಮರೂ ನನಗಿದ್ದರು. ನನಗೆ ದನದ ಹಿಂಡುಗಳೂ
ಕುರಿಮಂದೆಗಳೂ ಇದ್ದವು. ಜೆರುಸಲೇಮಿನಲ್ಲಿ ಇದ್ದವರೆ
ಲ್ಲರಿಗಿಂತಲೂ ಹೆಚ್ಚು ವಸ್ತುಗಳನ್ನು ನಾನು ಪಡೆದಿದ್ದೆ
8ಇದಲ್ಲದೆ ಬೆಳ್ಳಿಬಂಗಾರಗಳನ್ನು ನನಗೋಸ್ಕರ ಸಂಗ್ರ
ಹಿಸಿದೆ; ರಾಜರುಗಳಿಂದಲೂ ಅವರ ದೇಶಗಳಿಂದಲೂ
ಭಂಡಾರಗಳನ್ನು ತೆಗೆದುಕೊಂಡೆ. ನನಗೋಸ್ಕರ
ಹಾಡಲು ಗಾಯಕಗಾಯಕಿಯರಿದ್ದರು ಮನುಷ್ಯನು
ಬಯಸಬಹುದಾದ ಪ್ರತಿಯೊಂದನ್ನೂ ನಾನು ಪಡೆದಿದ್ದೆ.
9ನಾನು ಬಹು ಐಶ್ವರ್ಯವಂತನಾದೆ; ಪ್ರಸಿದ್ಧನಾದೆ.
ನನಗಿಂತ ಮೊದಲು ಜೆರುಸಲೇಮಿನಲ್ಲಿದ್ದ ಎಲ್ಲರಿ
ಗಿಂತಲೂ ನಾನು ದೊಡ್ಡವನಾದೆ. ನನಗೆ ಸಹಾಯಕ್ಕಾಗಿ
ಯಾವಾಗಲೂ ನನ್ನಲ್ಲಿ ಜ್ಞಾನವಿತ್ತು. 10ನನ್ನ ಕಣ್ಣುಗಳು
ಬಯಸಿದ್ದನ್ನೆಲ್ಲ ನನಗೋಸ್ಕರ ಪಡೆದುಕೊಂಡೆನು.
ಯಾವುದೇ ಸುಖದಿಂದಾಗಲೀ ನನ್ನ ಹೃದಯವನ್ನು ನಾನು
ತಡೆ ಹಿಡಿಯಲಿಲ್ಲ; ಯಾಕಂದರೆ ನನ್ನ ಕಾರ್ಯಗಳಲ್ಲಿ ನನ್ನ
ಹೃದಯವು ಸಂತೋಷಗೊಂಡಿತ್ತು. ನನ್ನ ಪ್ರಯಾಸದ
ಫಲವು ಅದೊಂದೇ.
11ನನ್ನ ಕಾರ್ಯಗಳನ್ನೂ ನನ್ನ ಪ್ರಯಾಸವನ್ನೂ ಆಲೋ
ಚಿಸಿದೆ. ಗಾಳಿಯನ್ನು ಹಿಂದಟ್ಟಿದ ಹಾಗೆ ಅದೆಲ್ಲಾ ವ್ಯರ್ಥ
ವೆಂದು ಕಂಡುಕೊಂಡೆ. ನಮ್ಮ ಈ ಜೀವಮಾನದ ಯಾವ
ಕೆಲಸಗಳಿಂದಲೂ ಲಾಭವಿಲ್ಲ.

### ಜ್ಞಾನಿಗೂ ಅಜ್ಞಾನಿಗೂ ವ್ಯತ್ಯಾಸವೇನು?

12ರಾಜನಿಗಿಂತ ಹೆಚ್ಚಾಗಿ ಮಾಡಲು ಬೇರೆ ಯಾರಿಗೂ
ಸಾಧ್ಯವಿಲ್ಲ. ನೀನು ಮಾಡಬೇಕೆನ್ನುವುದನ್ನು ನಿನಗಿಂತ
ಮೊದಲೇ ಬೇರೊಬ್ಬ ರಾಜನು ಮಾಡಿರುತ್ತಾನೆ; ಆದ್ದ
ರಿಂದ ರಾಜನ ಕಾರ್ಯಗಳು ಸಹ ವ್ಯರ್ಥವೆಂದು ಕಂಡು
ಕೊಂಡೆನು. ಆದ್ದರಿಂದ ನಾನು ಜ್ಞಾನವನ್ನೂ ಮೂಢ
ತನವನ್ನೂ ಬುದ್ಧಿಹೀನತೆಯನ್ನೂ ಮತ್ತೆ ಮತ್ತೆ
ಆಲೋಚಿಸಿದೆನು. 13ಬೆಳಕು ಕತ್ತಲೆಗಿಂತ ಉತ್ತಮ
ವಾಗಿರುವಂತೆ ಜ್ಞಾನವು ಮೂಢತನಕ್ಕಿಂತ ಉತ್ತಮವಾಗಿದೆ
ಎಂಬುದನ್ನು ಅರಿತುಕೊಂಡೆನು. 14ಅದು ಈ ರೀತಿಯಿದೆ:
ಜ್ಞಾನಿಯು ತನ್ನ ಮಾರ್ಗವನ್ನು ತಿಳಿದುಕೊಳ್ಳಲು ತನ್ನ
ಮನಸ್ಸನ್ನು ಕಣ್ಣುಗಳಂತೆ ಉಪಯೋಗಿಸುವನು.
ಮೂಢನಾದರೊ ಕತ್ತಲೆಯಲ್ಲಿ ನಡೆದು ಹೋಗುವನು.

ಆದರೆ ಜ್ಞಾನಿಗೂ ಮೂಢನಿಗೂ ಒಂದೇ ಗತಿಯೆಂದು
ಕಂಡುಕೊಂಡೆನು ಅವರಿಬ್ಬರೂ ಸಾಯುವರು. 15ನಾನು
ನನ್ನೊಳಗೆ, ‘‘ಮೂಢನಿಗೆ ಸಂಭವಿಸುವ ಗತಿಯು ನನಗೂ
ಸಂಭವಿಸುವುದು. ಹೀಗಿರಲು ಜ್ಞಾನಿಯಾಗಲು ನಾನೇಕೆ
ಪ್ರಯಾಸಪಡಬೇಕು? ಇದೂ ವ್ಯರ್ಥವಲ್ಲವೇ?’’ ಅಂದು
ಕೊಂಡೆನು.
16ಯಾಕೆಂದರೆ ಮೂಢನು ಸಾಯುವಂತೆ ಜ್ಞಾನಿಯೂ
ಸಾಯುವುದರಿಂದ ಜನರು ಜ್ಞಾನಿಯನ್ನಾಗಲೀ ಮೂಢ
ನನ್ನಾಗಲೀ ಸದಾಕಾಲ ಜ್ಞಾಪಿಸಿಕೊಳ್ಳುವುದಿಲ್ಲ. ಅವರ
ಕಾರ್ಯಗಳನ್ನು ಮುಂದಿನ ಕಾಲದ ಜನರು ಮರೆತು
ಬಿಡುವರು. ಆದ್ದರಿಂದ ಜ್ಞಾನಿಗೂ ಮೂಢನಿಗೂ ಯಾವ
ವ್ಯತ್ಯಾಸವೂ ಇಲ್ಲ.

### ಜೀವನದಲ್ಲಿ ನಿಜ ಸಂತೋಷವಿದೆಯೇ?

17ಈ ಲೋಕದ ಕಾರ್ಯಗಳೆಲ್ಲಾ ಗಾಳಿಯನ್ನು ಹಿಂದ
ಟ್ಟಿದ ಹಾಗೆ ವ್ಯರ್ಥವೆಂದು ನನಗೆ ಕಂಡು ಬಂದುದ್ದರಿಂದ
ಜೀವನವೇ ನನಗೆ ಅಸಹ್ಯವಾಯಿತು.
18ನನ್ನ ಪ್ರಯಾಸದ ಫಲವನ್ನು ನನ್ನ ತರುವಾಯ
ಬೇರೆಯವರು ಪಡೆದುಕೊಳ್ಳುವುದರಿಂದ ನಾನು ಲೋಕ
ದಲ್ಲಿ ಪಟ್ಟ ಪ್ರಯಾಸಕ್ಕೆ ಬೇಸರಗೊಂಡೆನು. 19ನಾನು
ಜ್ಞಾನವನ್ನೂ ಪ್ರಯಾಸವನ್ನೂ ಯಾವುದರಲ್ಲಿ ವಿನಿಯೋ
ಗಿಸಿದ್ದೇನೋ ಅದರ ಮೇಲೆ ಬೇರೊಬ್ಬನು ದೊರೆತನ
ಮಾಡುವನು. ಅವನು ಜ್ಞಾನಿಯೋ ಮೂಢನೋ ನನಗೆ
ಗೊತ್ತಿಲ್ಲ. ಇದೂ ವ್ಯರ್ಥವೇ.
20ಆದ್ದರಿಂದ, ನಾನು ಈ ಲೋಕದಲ್ಲಿ ಪ್ರಯಾಸಪಟ್ಟ
ಕೆಲಸಗಳ ಬಗ್ಗೆ ವ್ಯಸನಗೊಂಡೆನು. 21ಒಬ್ಬನು ತನ್ನ ಜ್ಞಾನ
ದಿಂದಲೂ ತಿಳುವಳಿಕೆಯಿಂದಲೂ ಕಾರ್ಯವನ್ನು ಸಫಲ
ಗೊಳಿಸಿದ ಮೇಲೆ ಅದರ ಫಲವನ್ನು ಪ್ರಯಾಸಪಡದ
ಬೇರೊಬ್ಬನಿಗೆ ಬಿಟ್ಟುಹೋಗಬೇಕಾಗುವುದು. ಇದೂ
ವ್ಯರ್ಥವೂ ಅನ್ಯಾಯವೂ ಆಗಿದೆ.
22ಈ ಲೋಕದಲ್ಲಿ ಮನುಷ್ಯನು ಪಡುವ ಎಲ್ಲಾ
ಪ್ರಯಾಸದಿಂದ ಅವನಿಗೆ ಪ್ರಯೋಜನವೇನು? 23ಅವನ
ಜೀವಮಾನವೆಲ್ಲಾ ಅವನಿಗೆ ವ್ಯಸನವಿರುವುದು; ಕೆಲಸ
ದಲ್ಲೆಲ್ಲಾ ಕಷ್ಟವಿರುವುದು; ರಾತ್ರಿಯಲ್ಲಿಯೂ, ಮನಸ್ಸಿಗೆ
ವಿಶ್ರಾಂತಿಯಿರದು. ಇದೂ ವ್ಯರ್ಥವೇ.

24-25ಜೀವನದಲ್ಲಿ ಸುಖಪಡಲು ನನಗಿಂತಲೂ
ಹೆಚ್ಚಾಗಿ ಯಾರಾದರೂ ಪ್ರಯತ್ನಿಸಿರುವರೇ? ಇಲ್ಲ!
ಅನುಭವದಿಂದ ಹೇಳುವುದೇನಂದರೆ, ಅನ್ನಪಾನಗಳನ್ನು
ತೆಗೆದುಕೊಂಡು ಪ್ರಯಾಸದಲ್ಲಿಯೂ ಸುಖಪಡುವುದ
ಕ್ಕಿಂತ ಬೇರೆ ಯಾವ ಮೇಲೂ ಮನುಷ್ಯನಿಗಿಲ್ಲ. ಇದು
ಸಹ ದೇವರಿಂದ ಬಂದ ಭಾಗ್ಯವೆಂದು ಕಂಡುಕೊಂಡೆನು.
26ದೇವರು ತಾನು ಮೆಚ್ಚಿಕೊಂಡವನಿಗೆ ಜ್ಞಾನವನ್ನೂ
ವಿವೇಕವನ್ನೂ ಆನಂದವನ್ನೂ ಕೊಡುವನು. ಪಾಪಿ
ಗಾದರೋ ಪ್ರಯಾಸದಿಂದ ಸಂಪಾದಿಸುವ ಮತ್ತು ಕೂಡಿಸಿ
ಡುವ ಕೆಲಸವನ್ನು ಕೊಡುವನು. ಅವನು ಕೂಡಿಸಿಟ್ಟವು
ಗಳನ್ನು ದೇವರು ತನ್ನ ಮೆಚ್ಚಿಕೆಗೆ ಪಾತ್ರನಾದವನಿಗೆ
ಕೊಡುವನು. ಇದು ಸಹ ಗಾಳಿಯನ್ನು ಹಿಂದಟ್ಟಿದ ಹಾಗೆ
ವ್ಯರ್ಥ.

## ಪ್ರತಿಯೊಂದಕ್ಕೂ ಸೂಕ್ತ ಸಮಯವಿದೆ

3 ಪ್ರತಿಯೊಂದಕ್ಕೂ ಸೂಕ್ತವಾದ ಸಮಯವಿದೆ.
ಭೂಮಿಯ ಮೇಲೆ ನಡೆಯುವ ಪ್ರತಿಯೊಂದು
ಕಾರ್ಯಕ್ಕೂ ಸೂಕ್ತ ಸಮಯವಿದೆ.

2 ಹುಟ್ಟುವ ಸಮಯ, ಸಾಯುವ ಸಮಯ, ನೆಡುವ
ಸಮಯ, ಸಸಿಗಳನ್ನು ಕೀಳುವ ಸಮಯ.
3 ಕೊಲ್ಲುವ ಸಮಯ, ವಾಸಿಮಾಡುವ ಸಮಯ.
ನಾಶಮಾಡುವ ಸಮಯ, ಕಟ್ಟುವ ಸಮಯ.
4 ಅಳುವ ಸಮಯ, ನಗುವ ಸಮಯ, ಗೋಳಾಡುವ
ಸಮಯ, ನೃತ್ಯಮಾಡುವ ಸಮಯ,
5 ಆಯುಧಗಳನ್ನು ಬಿಸಾಡುವ ಸಮಯ, ಆಯುಧ
ಗಳನ್ನು ಎತ್ತಿಕೊಳ್ಳುವ ಸಮಯ, ಅಪ್ಪಿಕೊಳ್ಳುವ
ಸಮಯ, ಅಪ್ಪಿಕೊಳ್ಳದಿರುವ ಸಮಯ.
6 ಹುಡುಕುವ ಸಮಯ, ಹುಡುಕದಿರುವ ಸಮಯ,
ವಸ್ತುಗಳನ್ನು ಇಟ್ಟುಕೊಳ್ಳುವ ಸಮಯ. ವಸ್ತು
ಗಳನ್ನು ಬಿಸಾಡುವ ಸಮಯ.
7 ಬಟ್ಟೆಯನ್ನು ಹರಿಯುವ ಸಮಯ, ಬಟ್ಟೆಯನ್ನು
ಹೊಲಿಯುವ ಸಮಯ, ಮೌನವಾಗಿರುವ
ಸಮಯ, ಮಾತಾಡುವ ಸಮಯ,
8 ಪ್ರೀತಿ ಮಾಡುವ ಸಮಯ, ದ್ವೇಷಿಸುವ ಸಮಯ,
ಯುದ್ಧ ಮಾಡುವ ಸಮಯ, ಶಾಂತಿಯಿಂದಿರುವ
ಸಮಯ.

## ಲೋಕವು ದೇವರ ಹತೋಟಿಯಲ್ಲಿದೆ

9ದುಡಿಯುವವನಿಗೆ ಅವನ ಪ್ರಯಾಸದಿಂದ ಲಾಭ
ವೇನು? 10ದೇವರು ಮನುಷ್ಯರಿಗೆ ಕೊಟ್ಟಿರುವ ಪ್ರಯಾ
ಸದ ಕೆಲಸವನ್ನೆಲ್ಲಾ ನೋಡಿದ್ದೇನೆ. 11ಈ ಲೋಕವನ್ನು
ಕುರಿತು ಆಲೋಚಿಸುವುದಕ್ಕೆ ದೇವರು ನಮಗೆ ಜ್ಞಾನ
ವನ್ನು ಕೊಟ್ಟಿದ್ದರೂ ದೇವರ ಕಾರ್ಯವನ್ನು ಸಂಪೂರ್ಣ
ವಾಗಿ ಅರ್ಥಮಾಡಿಕೊಳ್ಳಲು ನಮಗೆ ಸಾಧ್ಯವೇ ಇಲ್ಲ.
ದೇವರು ಪ್ರತಿಯೊಂದನ್ನೂ ತಕ್ಕ ಸಮಯದಲ್ಲಿ ಮಾಡು
ವನು.

12ಬದುಕಿರುವಷ್ಟು ಕಾಲ ಸಂತೋಷವಾಗಿದ್ದು ಸುಖ
ಪಡುವುದಕ್ಕಿಂತ ಬೇರೆ ಯಾವ ಮೇಲೂ ಮನುಷ್ಯರಿಗೆ
ಇಲ್ಲವೆಂದು ಕಲಿತುಕೊಂಡೆನು. 13ಪ್ರತಿಯೊಬ್ಬನು ಅನ್ನ
ಪಾನಗಳನ್ನು ತೆಗೆದುಕೊಂಡು ತನ್ನ ಕೆಲಸವನ್ನು
ಸಂತೋಷದಿಂದ ಮಾಡುವುದು ದೇವರಿಗೆ ಇಷ್ಟವಾಗಿದೆ.
ಅವು ದೇವರ ವರವಾಗಿವೆ.

14ದೇವರ ಕಾರ್ಯಗಳೆಲ್ಲಾ ಶಾಶ್ವತವಾದದ್ದು. ಆತನ
ಕಾರ್ಯಗಳಿಗೆ ಮನುಷ್ಯರು ಏನನ್ನೂ ಸೇರಿಸಲಾರರು;
ಅವುಗಳಿಂದ ಏನನ್ನೂ ತೆಗೆಯಲಾರರು. ಮನುಷ್ಯರು
ದೇವರಲ್ಲಿ ಭಯಭಕ್ತಿಯುಳ್ಳವರಾಗಿರಬೇಕೆಂಬುದೇ
ಇದಕ್ಕೆ ಕಾರಣ. 15ಈಗ ಸಂಭವಿಸುವಂಥವುಗಳೂ
ಮುಂದೆ ಸಂಭವಿಸುವಂಥವುಗಳೂ ಹಿಂದಿನ ಕಾಲದಲ್ಲಿ
ಸಂಭವಿಸಲ್ಪಟ್ಟಿವೆ. ದೇವರು ಅದೇ ಕಾರ್ಯಗಳನ್ನು ಮತ್ತೆ
ಮತ್ತೆ ಬರಮಾಡುವನು.

16ನಾನು ಈ ಲೋಕವನ್ನು ದೃಷ್ಟಿಸಿ ನೋಡಿದಾಗ,
ನ್ಯಾಯಾಲಯಗಳಲ್ಲಿ ನೀತಿನ್ಯಾಯಗಳ ಬದಲಾಗಿ ದುಷ್ಟ
ತನ ತುಂಬಿರುವುದನ್ನು ಕಂಡುಕೊಂಡೆನು. 17ಆಗ ನಾನು
ಮನಸ್ಸಿನಲ್ಲಿ, ‘‘ದೇವರು ಪ್ರತಿಯೊಂದಕ್ಕೂ ಸಮಯವನ್ನು
ಗೊತ್ತುಪಡಿಸಿದ್ದಾನೆ. ಜನರು ಮಾಡುವ ಪ್ರತಿಯೊಂದಕ್ಕೂ
ನ್ಯಾಯತೀರಿಸಲು ಆತನು ಸಮಯವನ್ನು ಗೊತ್ತುಪಡಿಸಿ
ದ್ದಾನೆ. ದೇವರು ನೀತಿವಂತರಿಗೂ ದುಷ್ಟರಿಗೂ ನ್ಯಾಯ
ತೀರಿಸುವನು’’ ಎಂದುಕೊಂಡೆನು.

## ಮನುಷ್ಯರು ಪ್ರಾಣಿಗಳಂತಿರುವರೇ?

18ಅಲ್ಲದೆ ಮನಸ್ಸಿನಲ್ಲಿ ಹೀಗೆಂದುಕೊಂಡೆನು: ‘‘ಮನು
ಷ್ಯರು ಪ್ರಾಣಿಗಳಿಗಿಂತ ಮೇಲಾದವರಲ್ಲ ಎಂಬುದನ್ನು
ನಾವು ತಿಳಿದುಕೊಳ್ಳಬೇಕೆಂಬುದು ದೇವರ ಇಷ್ಟವಾಗಿದೆ.
19ಮನುಷ್ಯನು ಪ್ರಾಣಿಗಿಂತಲೂ ಉತ್ತಮನಾಗಿರುವನೇ?
ಇಲ್ಲ! ಏಕೆಂದರೆ ಪ್ರತಿಯೊಂದು ಉಪಯೋಗವಿಲ್ಲದ್ದು.
ಪ್ರಾಣಿಗಳಿಗೂ ಮನುಷ್ಯರಿಗೂ ಒಂದೇ ಗತಿಯಾಗು
ವುದು; ಪ್ರಾಣಿಗಳೂ ಸಾಯುವವು, ಮನುಷ್ಯರೂ
ಸಾಯುವರು. ಮನುಷ್ಯರಿಗೂ ಪ್ರಾಣಿಗಳಿಗೂ ಇರು
ವುದು ಒಂದೇ ‘‘ಉಸಿರು.’’ ಸತ್ತ ಪ್ರಾಣಿಗೂ ಸತ್ತ
ಮನುಷ್ಯನಿಗೂ ವ್ಯತ್ಯಾಸವಿಲ್ಲ. 20ಮನುಷ್ಯರ ಮತ್ತು
ಪ್ರಾಣಿಗಳ ದೇಹಗಳೆಲ್ಲ ಒಂದೇ ಸ್ಥಳಕ್ಕೆ ಹೋಗುತ್ತವೆ.
ಮನುಷ್ಯರು ಮಣ್ಣಿನಿಂದ ಬಂದರು. ಕೊನೆಗೆ ಅವರು
ಮಣ್ಣಿಗೇ ಹೋಗುವರು. ಪ್ರಾಣಿಗಳು ಮಣ್ಣಿನಿಂದ

ಬಂದವು; ಕೊನೆಗೆ ಅವು ಮಣ್ಣಿಗೇ ಹೋಗುತ್ತವೆ.
21ಮನುಷ್ಯನ ಆತ್ಮಕ್ಕೆ ಏನು ಸಂಭವಿಸುವುದೋ ಯಾರಿಗೆ
ಗೊತ್ತು? ಮನುಷ್ಯನ ಆತ್ಮವು ದೇವರ ಬಳಿಗೆ ಮೇಲಕ್ಕೆ
ಹೋಗುವುದೋ ಪ್ರಾಣಿಯ ಆತ್ಮವು ಭೂಮಿಯೊಳಗೆ
ಇಳಿಯುವುದೋ ಯಾರಿಗೆ ಗೊತ್ತು?

22ಆದ್ದರಿಂದ ಮನಷ್ಯನಿಗೆ ತನ್ನ ಕಾರ್ಯದಲ್ಲಿ
ಸಂತೋಷಪಡುವುದಕ್ಕಿಂತ ಬೇರೆ ಯಾವ ಮೇಲೂ ಇಲ್ಲ.
ಇದೇ ಅವನ ಪಾಲು ಎಂದು ಗ್ರಹಿಸಿಕೊಂಡೆನು. ಅಲ್ಲದೆ
ಮುಂದಿನ ಕಾಲವನ್ನು ಕುರಿತು ಮನುಷ್ಯನು ಚಿಂತಿಸ
ಬಾರದು. ಯಾಕೆಂದರೆ ಅವನ ಜೀವಮಾನದನಂತರ
ಸಂಭವಿಸುವಂಥವುಗಳನ್ನು ನೋಡಲು ಈ ಲೋಕಕ್ಕೆ
ಅವನನ್ನು ಯಾರು ಬರಮಾಡುವರು?''

### ಯಾರು ಮೇಲು? ಸತ್ತವರೋ? ಬದುಕಿರುವವರೋ?

4 ನಾನು ದೃಷ್ಟಿಸಿ ನೋಡಿದಾಗ, ಅನೇಕ ಜನರು
ಹಿಂಸೆಗೆ ಒಳಗಾಗಿರುವುದನ್ನು ಕಂಡೆನು. ಅವರ
ಕಣ್ಣೀರನ್ನೂ ನೋಡಿದೆನು. ದುಃಖದಲ್ಲಿದ್ದ ಅವರನ್ನು
ಸಂತೈಸಲು ಒಬ್ಬರೂ ಇರಲಿಲ್ಲ. ಹಿಂಸಕರು ಎಲ್ಲಾ
ಅಧಿಕಾರವನ್ನು ಹೊಂದಿದ್ದರು; ಅವರಿಂದ ಹಿಂಸೆಗೆ
ಒಳಗಾದವರನ್ನು ಸಂತೈಸಲು ಯಾರೂ ಇರಲಿಲ್ಲ. 2ಇನ್ನೂ
ಜೀವದಿಂದಿರುವವರಿಗಿಂತ ಸತ್ತವರೇ ಮೇಲೆಂದು
ನಿರ್ಧರಿಸಿದೆನು. 3ಹುಟ್ಟುವಾಗಲೇ ಸತ್ತು ಹೋದವರಿಗೆ
ಒಳ್ಳೆಯದೇ ಆಯಿತು! ಯಾಕೆಂದರೆ ಈ ಲೋಕದಲ್ಲಿ
ನಡೆಯುವ ಕೆಟ್ಟದ್ದನ್ನು ಅವರು ನೋಡಲೇ ಇಲ್ಲ.

### ಕಷ್ಟಪಟ್ಟು ದುಡಿಯುವುದೇಕೆ?

4ಆ ಮೇಲೆ ನಾನು, ''ಜನರು ಪ್ರಯಾಸಪಟ್ಟು ಕೆಲಸ
ಮಾಡುವುದೇಕೆ?'' ಎಂದು ಆಲೋಚಿಸಿದೆ. ಜನರು
ಏಳಿಗೆ ಹೊಂದಲು ಮತ್ತು ಬೇರೆಯವರಿಗಿಂತ ಹೆಚ್ಚು
ಅಭಿವೃದ್ಧಿಯಾಗಲು ಪ್ರಯತ್ನಿಸುವರು; ಅದಕ್ಕೆ ಅವರ
ಮತ್ಸರವೇ ಕಾರಣ. ಇದೂ ಗಾಳಿಯನ್ನು ಹಿಂದಟ್ಟಿದ್ದ
ಹಾಗೆ ವ್ಯರ್ಥ.

5ಕೆಲವರು ಹೇಳುವಂತೆ, ''ಏನೂ ಮಾಡದೆ ಕೈಕಟ್ಟಿ
ಕೊಂಡು ಕುಳಿತುಕೊಳ್ಳುವುದು ಮೂಢತನ. ದುಡಿಯದ
ವನು ಹಸಿವೆಯಿಂದ ಸಾಯುವನು.'' 6ಇದೇನೊ
ನಿಜವಿರಬಹುದು. ಆದರೆ ದುರಾಶೆಪಡುವುದಕ್ಕಿಂತ ಇರು
ವುದರಲ್ಲಿ ತೃಪ್ತರಾಗಿರುವುದೇ ಮೇಲು.

7ಲೋಕದಲ್ಲಿ ಮತ್ತೊಂದು ವ್ಯರ್ಥವನ್ನು ಕಂಡೆನು.
8ಸ್ವಂತ ಕುಟುಂಬವನ್ನು ಹೊಂದಿಲ್ಲದವನು ಅಂದರೆ
ಅಣ್ಣತಮ್ಮಂದಿರಾಗಲೀ ಮಕ್ಕಳಾಗಲೀ ಇಲ್ಲದವನು ಸಹ
ಪ್ರಯಾಸಪಟ್ಟು ದುಡಿಯುವನು. ಅವನಿಗೂ ತನ್ನ
ಆಸ್ತಿಯಲ್ಲಿ ತೃಪ್ತಿಯಿಲ್ಲ. ಅವನು ಬಿಡುವಿಲ್ಲದೆ ಪ್ರಯಾಸ
ಪಟ್ಟು ದುಡಿಯುವನು. ''ನಾನೇಕೆ ಪ್ರಯಾಸಪಟ್ಟು
ದುಡಿಯುತ್ತಿರುವೆ. ನಾನೇಕೆ ಜೀವನದ ಸುಖವನ್ನು
ಅನುಭವಿಸುತ್ತಿಲ್ಲ?'' ಎಂದು ಅವನು ಆಲೋಚಿಸುವುದೇ
ಇಲ್ಲ. ಇದು ಸಹ ಕೆಟ್ಟದ್ದೂ ವ್ಯರ್ಥವಾದದ್ದೂ ಆಗಿದೆ.

### ಒಗಟ್ಟನಲ್ಲಿ ಬಲವಿದೆ.

9ಇಬ್ಬರು ಒಬ್ಬನಿಗಿಂತಲೂ ಉತ್ತಮ. ಇಬ್ಬರು ಒಟ್ಟಾಗಿ
ದುಡಿದರೆ ಹೆಚ್ಚು ಗಳಿಸುವರು.

10ಒಬ್ಬನು ಬಿದ್ದರೆ ಇನ್ನೊಬ್ಬನು ಎತ್ತುವನು. ಬಿದ್ದಾಗ
ಒಬ್ಬಂಟಿಗನಾಗಿದ್ದರೆ ಎತ್ತಲು ಯಾರೂ ಇಲ್ಲದಿರುವುದ
ರಿಂದ ಅವನಿಗೆ ದುರ್ಗತಿಯಾಗುವುದು.

11ಇಬ್ಬರು ಒಟ್ಟಿಗೆ ಮಲಗಿಕೊಂಡರೆ ಅವರಿಬ್ಬರಿಗೂ
ಬೆಚ್ಚಗಾಗುವುದು; ಆದರೆ ಒಬ್ಬಂಟಿಗನಿಗೆ ಬೆಚ್ಚಗಾಗು
ವುದಿಲ್ಲ.

12ವೈರಿಯೊಬ್ಬನು ಒಬ್ಬನನ್ನು ಸೋಲಿಸಬಹುದು;
ಆದರೆ ಇಬ್ಬರನ್ನು ಸೋಲಿಸಲು ಅವನಿಗೆ ಕಷ್ಟವಾಗು
ವುದು; ಒಂದು ವೇಳೆ ಮೂವರಿದ್ದರೆ ಅವರು ಮೂರೆಳೆಯ
ಹಗ್ಗದಂತೆ ಇರುವುದರಿಂದ ಅವನಿಗೆ ಮತ್ತಷ್ಟು ಕಷ್ಟ
ವಾಗುವುದು.

### ಜನರು, ರಾಜಕೀಯ ಮತ್ತು ಪ್ರಖ್ಯಾತಿ

13ಜ್ಞಾನಿಯಾದ ಬಡಯುವಕನು ಎಚ್ಚರದ ಮಾತಿಗೆ
ಕಿವಿಗೊಡದ ಮೂಢ ರಾಜನಿಗಿಂತ ಉತ್ತಮ. 14ಆ
ಬಡಯುವಕನು ದೇಶದ ಒಂದು ಬಡಕುಟುಂಬದಲ್ಲಿ
ಹುಟ್ಟಿದ್ದಿರಬಹುದು ಅಥವಾ ದೇಶವನ್ನು ಆಳುವುದಕ್ಕಾಗಿ
ಸೆರೆಮನೆಯಿಂದ ಬಿಡುಗಡೆ ಮಾಡಲ್ಪಟ್ಟಿರಬಹುದು.
15ಆದರೆ ನಾನು ಗಮನಿಸಿದ ಪ್ರಕಾರ ಜನರು ಆ
ಯೌವನಸ್ಥನ ಪಕ್ಷ ವಹಿಸುವರು. ಅವನು ಹೊಸರಾಜ
ನಾಗುವನು. 16ಅನೇಕಾನೇಕ ಜನರು ಆ ಯೌವನಸ್ಥನಿಗೆ
ಬೆಂಬಲನೀಡುವರು. ಆದರೆ ಕೊನೆಗಾಲದಲ್ಲಿ ಅವರೇ
ಅವನನ್ನು ಇಷ್ಟಪಡುವುದಿಲ್ಲ. ಇದು ಸಹ ಗಾಳಿಯನ್ನು
ಹಿಂದಟ್ಟಿದಂತೆ ವ್ಯರ್ಥ.

### ಹರಕೆ ಮಾಡುವಾಗ ಎಚ್ಚರಿಕೆಯಿಂದಿರಿ

5 ದೇವರನ್ನು ಆರಾಧಿಸಲು ಹೋಗುವಾಗ ಎಚ್ಚರಿಕೆ
ಯಿಂದಿರಿ. ಮೂಢರಂತೆ ಯಜ್ಞಗಳನ್ನು ಅರ್ಪಿಸು
ವುದಕ್ಕಿಂತ ದೇವರಿಗೆ ಕಿವಿಗೊಡವುದೇ ಉತ್ತಮ.
ಮೂಢರು ದುಷ್ಕೃತ್ಯಗಳನ್ನು ಮಾಡುತ್ತಲೇ ಇರುವರು;
ಆದರೆ ಅವರಿಗೆ ಅದು ಗೊತ್ತೇ ಇಲ್ಲ. 2ದೇವರಿಗೆ ಹರಕೆ
ಮಾಡುವಾಗ ಎಚ್ಚರಿಕೆಯಿಂದಿರಿ. ನೀವು ದೇವರೊಂದಿಗೆ
ಮಾತಾಡುವಾಗ ಎಚ್ಚರಿಕೆಯಿಂದಿರಿ. ನಿಮ್ಮ ಮನೋ
ದ್ವೇಗಗಳು ನಿಮ್ಮನ್ನು ಮಾತಿನಲ್ಲಿ ದುಡುಕಿಸದಂತೆ

ನೋಡಿಕೊಳ್ಳಿ. ದೇವರು ಪರಲೋಕದಲ್ಲಿರುವುದರಿಂದ
ಮತ್ತು ನೀವು ಈ ಲೋಕದಲ್ಲಿರುವುದರಿಂದ ನಿಮ್ಮ
ಮಾತುಗಳು ಮಿತವಾಗಿರಲಿ. ಈ ನುಡಿ ಸತ್ಯವಾದದ್ದೇ:
3"ಅನೇಕ ಚಿಂತೆಗಳಿಂದ ದುಸ್ವಪ್ನಗಳಾಗುವಂತೆ
ಮೂಢನು ಅನೇಕ ಮಾತುಗಳನ್ನಾಡುವನು."
4ನೀವು ಹರಕೆ ಮಾಡಿಕೊಂಡರೆ ತಡಮಾಡದೆ ಅದನ್ನು
ನೇರವೇರಿಸಿ. ಮೂಢರ ವಿಷಯದಲ್ಲಿ ದೇವರಿಗೆ
ಸಂತೋಷವಿಲ್ಲ. ನೀವು ದೇವರಿಗೆ ಹರಕೆಮಾಡಿ
ಕೊಂಡದ್ದನ್ನು ಸಲ್ಲಿಸಿರಿ. 5ಹರಕೆ ಮಾಡಿ ಸಲ್ಲಿಸದಿರು
ವುದಕ್ಕಿಂತ ಹರಕೆ ಮಾಡದಿರುವುದೇ ಉತ್ತಮ. 6ಆದ್ದ
ರಿಂದ ನಿಮ್ಮ ಮಾತುಗಳು ನಿಮ್ಮನ್ನು ಪಾಪಕ್ಕೆ ನಡೆಸದಂತೆ
ನೋಡಿಕೊಳ್ಳಿ. "ನಾನು ಅಜಾಗ್ರತೆಯಿಂದ ಹೇಳಿದೆ"
ಎಂದು ಯಾಜಕನಿಗೆ ತಿಳಿಸಬೇಡಿ. ಇಲ್ಲವಾದರೆ, ದೇವರು
ನಿಮ್ಮ ಮಾತುಗಳಿಗೆ ಕೋಪಗೊಂಡು ನೀವು ದುಡಿದಿರು
ವುದನ್ನೆಲ್ಲಾ ನಾಶಮಾಡಬಹುದು. 7ಉಪಯೋಗವಿಲ್ಲದ
ನಿಮ್ಮ ಕನಸುಗಳಾಗಲೀ ಜಂಬದ ಮಾತುಗಳಾಗಲೀ
ನಿಮ್ಮನ್ನು ಕೇಡಿಗೆ ನಡೆಸದಂತೆ ನೋಡಿಕೊಳ್ಳಿರಿ; ದೇವ
ರಲ್ಲಿ ಭಯಭಕ್ತಿಯುಳ್ಳವರಾಗಿರಿ.

### ಯಾವನೂ ಸರ್ವಾಧಿಪತಿಯಲ್ಲ

8ದೇಶದಲ್ಲಿ ಬಡವರಿಂದ ಬಲವಂತ ಸೇವೆಮಾಡಿಸುವು
ದನ್ನು ಕಂಡು ಅವರಿಗೆ ಅನ್ಯಾಯವಾಗಿದೆಯೆಂದೂ ಹಕ್ಕಿಗೆ
ಚ್ಯುತಿಯಾಗಿದೆಯೆಂದೂ ಆಶ್ಚರ್ಯಪಡಬೇಡಿ. ಅವ
ರಿಂದ ಬಲವಂತವಾಗಿ ದುಡಿಸುವಅಧಿಪತಿಗೆ ಬಲವಂತ
ದಿಂದ ದುಡಿಸುವ ಮತ್ತೊಬ್ಬ ಅಧಿಪತಿಯಿರುವನು. ಈ
ಇಬ್ಬರು ಅಧಿಪತಿಗಳಿಗೂ ಮತ್ತೊಬ್ಬ ಅಧಿಪತಿಯಿರು
ವನು. 9ರಾಜನು ಸಹ ಸೇವಕನಾಗಿದ್ದಾನೆ; ಅವನ ದೇಶವು
ಅವನನ್ನು ಗಳಿಸಿಕೊಂಡಿದೆ.

### ಐಶ್ವರ್ಯವು ಸಂತೋಷವನ್ನು ಖರೀದಿ ಮಾಡಲಾರದು

10ಹಣದಾಸೆಯುಳ್ಳವನು ತನ್ನಲ್ಲಿ ಎಷ್ಟೇ ಹಣವಿದ್ದರೂ
ತೃಪ್ತನಾಗಲಾರನು. ಐಶ್ವರ್ಯದಾಸೆಯುಳ್ಳವನು ಎಷ್ಟೇ
ಸಂಪಾದಿಸಿದರೂ ತೃಪ್ತನಾಗುವುದಿಲ್ಲ. ಇದು ಸಹ ವ್ಯರ್ಥ.
11ಐಶ್ವರ್ಯ ಹೆಚ್ಚಿದಂತೆಲ್ಲಾ "ಅನುಭವಿಸುವವರ"
ಸಂಖ್ಯೆಯೂ ಹೆಚ್ಚುವುದು. ಐಶ್ವರ್ಯವಂತನು ಅದನ್ನು
ಕಣ್ಣಿಂದ ನೋಡಬಹುದಷ್ಟೇ ಹೊರತು ಬೇರೆ ಯಾವ
ಲಾಭವೂ ಅವನಿಗಿಲ್ಲ.
12ದಿನವೆಲ್ಲಾ ಪ್ರಯಾಸಪಟ್ಟು ದುಡಿಯುವವನು
ಸಮಾಧಾನದಿಂದ ಮಲಗಿಕೊಳ್ಳುವನು. ಅವನಿಗೆ ತಿನ್ನಲು
ಸ್ವಲ್ಪವೇ ಇರಲಿ ಅಥವಾ ಹೆಚ್ಚೇ ಇರಲಿ, ಅದು ಮುಖ್ಯ
ವಲ್ಲ. ಐಶ್ವರ್ಯವಂತನಿಗಾದರೊ ತನ್ನ ಸಂಪತ್ತಿನ ಕುರಿತು
ಚಿಂತಿಸುತ್ತಾ ನಿದ್ರಿಸಲಾರನು.
13 ಈ ಲೋಕದಲ್ಲಿ ದುರ್ಗತಿಯೊಂದನ್ನು ನೋಡಿ
ದ್ದೇನೆ. ಒಬ್ಬನು ತನ್ನ ಭವಿಷತ್ತಿಗಾಗಿ ಹಣವನ್ನು ಕೂಡಿ
ಡುತ್ತಾನೆ. 14ಬಳಿಕ ಅವನು ಯಾವುದೊ ಕೇಡಿಗೆ
ಗುರಿಯಾಗಿ ತನ್ನ ಹಣವನ್ನೆಲ್ಲಾ ಕಳೆದುಕೊಳ್ಳುವನು;
ಕೊನೆಯಲ್ಲಿ ತನ್ನ ಮಗನಿಗೆ ಕೊಡಲು ಅವನಲ್ಲಿ ಏನೂ
ಉಳಿದಿರುವುದಿಲ್ಲ.

### ಬರಿದಾಗಿ ಬರುತ್ತೇವೆ, ಬರಿದಾಗಿ ಹೋಗುತ್ತೇವೆ,

15ಮನುಷ್ಯನು ತಾಯಿಯ ಗರ್ಭದಿಂದ ಬರಿದಾಗಿ ಈ
ಲೋಕಕ್ಕೆ ಬರುವನು; ಸಾಯುವಾಗ ಅದೇ ರೀತಿ
ಬರಿದಾಗಿ ಹೋಗುವನು; ತಾನು ಪ್ರಯಾಸಪಟ್ಟು
ಸಂಪಾದಿಸಿದವುಗಳಲ್ಲಿ ಒಂದನ್ನೂ ಅವನು ತನ್ನೊಡನೆ
ತೆಗೆದುಕೊಂಡು ಹೋಗಲಾರನು. 16ಅದು ಸಹ ತುಂಬ
ದುಃಖಕರ. ಅವನು ಬಂದ ರೀತಿಯಲ್ಲಿಯೇ ಈ ಲೋಕ
ವನ್ನು ಬಿಟ್ಟುಹೋಗುವನು. "ಗಾಳಿಯನ್ನು ಹಿಂದಟ್ಟು
ವುದರಿಂದ" ಪ್ರಯೋಜನವೇನು? 17ಅವನ ಜೀವಮಾನ
ವೆಲ್ಲಾ ವ್ಯಸನದಿಂದಲೂ ದುಃಖದಿಂದಲೂ ಕೂಡಿದೆ.
ನಿರಾಶೆಯೂ ಕಾಯಿಲೆಯೂ ಕೋಪವೂ ಅವನನ್ನು
ಕಾಡುತ್ತಲೇ ಇರುತ್ತವೆ. ನಿನ್ನ ಜೀವನದ ಕೆಲಸದಲ್ಲಿ
ಆನಂದಿಸು
18ನಾನು ಕಂಡುಕೊಂಡದ್ದೇನಂದರೆ, ಒಬ್ಬನು ತನ್ನ
ಅಲ್ಪಕಾಲದ ಜೀವಮಾನದಲ್ಲಿ ಅನ್ನಪಾನಗಳನ್ನು ತೆಗೆದು
ಕೊಂಡು ತನ್ನ ಪ್ರಯಾಸದಲ್ಲಿಯೂ ಸುಖವನ್ನನುಭವಿ
ಸುವುದೇ ಅವನಿಗೆ ಮೇಲು. ಇದೇ ಅವನ ಪಾಲು.
19ದೇವರು ಒಬ್ಬನಿಗೆ ಐಶ್ವರ್ಯವನ್ನೂ ಆಸ್ತಿಯನ್ನೂ
ಮತ್ತು ಅವುಗಳನ್ನು ಅನುಭವಿಸುವ ಭಾಗ್ಯವನ್ನೂ
ಕೊಟ್ಟಿದ್ದರೆ ಅವನು ಅವುಗಳನ್ನು ಅನುಭವಿಸಲಿ. ಅವನು
ತನಗಿರುವಂಥಗಳನ್ನು ಹೊಂದಿಕೊಂಡು ತನ್ನ ದುಡಿಮೆ
ಯಲ್ಲಿ ಸಂತೋಷಿಸಲಿ. ಅದು ದೇವರ ಅನುಗ್ರಹವಷ್ಟೇ.
20ತನ್ನ ಜೀವಿತವು ಅಲ್ಪಕಾಲದ್ದೆಂದು ಅವನು ನೆನಪು
ಮಾಡಿಕೊಳ್ಳಬೇಕು. ಯಾಕೆಂದರೆ ಅವನನ್ನು ಅವನಿಗೆ
ಇಷ್ಟವಾದ ಕೆಲಸದಲ್ಲಿ ನಿರತನನ್ನಾಗಿ ಮಾಡಿರುವಾತನು
ದೇವರೇ.

### ಐಶ್ವರ್ಯವು ಸಂತೋಷವನ್ನು ಕೊಡಲಾರದು

6 ಈ ಲೋಕದಲ್ಲಿ ಮತ್ತೊಂದು ಅನ್ಯಾಯವನ್ನು
ಕಂಡಿದ್ದೇನೆ. ಅದನ್ನು ಗ್ರಹಿಸಿಕೊಳ್ಳುವುದಕ್ಕೂ ಕಷ್ಟ;
2ದೇವರು ಒಬ್ಬನಿಗೆ ಐಶ್ವರ್ಯವನ್ನು, ಆಸ್ತಿಪಾಸ್ತಿಯನ್ನು
ಮತ್ತು ಘನತೆಯನ್ನು ಕೊಡುವನು. ಅವನು ತನಗೆ ಈಗ
ಬೇಕಾಗಿರುವ ಮತ್ತು ಮುಂದೆ ಬೇಕಾಗುವ ಎಲ್ಲವನ್ನೂ

ಹೊಂದಿರುವನು. ಆದರೆ ಅವುಗಳನ್ನು ಅನುಭವಿಸಲು
ದೇವರು ಅವನಿಗೆ ಅವಕಾಶಕೊಡುವುದಿಲ್ಲ. ಮತ್ತೊ
ಬ್ಬನು ಬಂದು ಎಲ್ಲವನ್ನೂ ತೆಗೆದುಕೊಳ್ಳುವನು. ಇದು ಸಹ
ತುಂಬ ಕೆಟ್ಟದ್ದೂ ಅರ್ಥವಿಲ್ಲದ್ದೂ ಆಗಿದೆ.

3ಒಬ್ಬನು ಬಹುಕಾಲ ಬದುಕಬಹುದು. ಅವನಿಗೆ
ನೂರು ಮಂದಿ ಮಕ್ಕಳಿರಬಹುದು. ಆದರೆ ಅವನಿಗೆ
ತೃಪ್ತಿಯೂ ಸತ್ತ ಮೇಲೆ ಉತ್ತರಕ್ರಿಯೆಯೂ ಇಲ್ಲದಿದ್ದರೆ
ಹುಟ್ಟುವಾಗಲೇ ಸಾಯುವ ಮಗು ಅವನಿಗಿಂತಲೂ
ಉತ್ತಮ. 4ಮಗುವು ಹುಟ್ಟುವಾಗಲೇ ಸತ್ತು ಹೋದರೆ
ಅದಕ್ಕೆ ನಿಜವಾಗಿಯೂ ಅರ್ಥವಿಲ್ಲ. ಅದು ಹೆಸರನ್ನೂ
ಹೊಂದಿಲ್ಲದೆ ಕತ್ತಲೆಯ ಗುಂಡಿಯಲ್ಲಿ ಹೂಳಲ್ಪಡು
ವುದು. 5ಅದು ಸೂರ್ಯನನ್ನು ನೋಡಲೇ ಇಲ್ಲ. ಅದಕ್ಕೆ
ತಿಳಿವಳಿಕೆಯೂ ಇಲ್ಲ. ಆದರೆ ದೇವರು ಅನುಗ್ರಹಿಸಿದವು
ಗಳಲ್ಲಿ ಸಂತೋಷಪಡದವನಿಗಿಂತ ಆ ಮಗುವೇ ಹೆಚ್ಚು
ವಿಶ್ರಾಂತಿಯನ್ನು ಪಡೆದುಕೊಳ್ಳುವುದು. 6ಅವನು ಎರಡು
ಸಾವಿರ ವರ್ಷಗಳ ಕಾಲ ಬದುಕಿಯೂ ಜೀವನದಲ್ಲಿ
ಸಂತೋಷಪಡದಿದ್ದರೆ ಏನು ಪ್ರಯೋಜನ? ಅವನ
ಅಂತ್ಯವನ್ನು ಆ ಮಗುವು ಹುಟ್ಟುವಾಗಲೇ ಕಂಡು
ಕೊಂಡಿತು.

7ಮನುಷ್ಯನು ದುಡಿಯುವುದೆಲ್ಲಾ ಊಟಕ್ಕಾಗಿಯೇ.
ಆದರೆ ಅವನಿಗೆ ತೃಪ್ತಿಯೇ ಇಲ್ಲ. 8ಆದ್ದರಿಂದ ಜ್ಞಾನಿಯು
ಮೂಢನಿಗಿಂತ ಉತ್ತಮನಲ್ಲ. ಬಡವರಾಗಿದ್ದರೂ
ಜೀವನವನ್ನು ಅರ್ಥಮಾಡಿಕೊಂಡು ಜೀವಿಸುವುದೇ
ಮೇಲು. 9ದುರಾಶೆಪಡುವುದಕ್ಕಿಂತ ಇರುವುದರಲ್ಲಿ
ಸಂತೋಷಪಡುವುದೇ ಉತ್ತಮ. ದುರಾಶೆಯಿಂದ
ಪ್ರಯೋಜನವಿಲ್ಲ. ಅದು ಸಹ ಗಾಳಿಯನ್ನು ಹಿಂದಟ್ಟಿ
ದಂತಿದೆ.

10-11ಮನುಷ್ಯನು ಕೇವಲ ಮನುಷ್ಯನಾಗಿ ಸೃಷ್ಟಿಸಲ್ಪ
ಟ್ಟಿದ್ದಾನೆ. ಅದರ ಬಗ್ಗೆ ವಾದಮಾಡುವುದರಿಂದ ಉಪ
ಯೋಗವಿಲ್ಲ. ಅಲ್ಲದೆ ಮನುಷ್ಯನು ದೇವರೊಂದಿಗೆ
ವಾದಮಾಡಲಾರನು. ಯಾಕೆಂದರೆ ದೇವರು ಮನುಷ್ಯ
ನಿಗಿಂತಲೂ ಬಲಿಷ್ಠನಾಗಿದ್ದಾನೆ. ಆದ್ದರಿಂದ ವಾದವು
ಕೇವಲ ನಿರರ್ಥಕವಾಗಿದೆ.

12ಮನುಷ್ಯನ ಅಲ್ಪಕಾಲದ ಜೀವನದಲ್ಲಿ ಅವನಿಗೆ
ಯಾವುದು ಉತ್ತಮವೆಂದು ಯಾರಿಗೆ ಗೊತ್ತು? ಅವನ
ಜೀವನವು ನೆರಳಿನಂತೆ ಕಳೆದುಹೋಗುವುದು. ಮುಂದೆ
ಏನಾಗುವುದೆಂದು ಯಾರೂ ಅವನಿಗೆ ಹೇಳಲಾರರು.

### ಜ್ಞಾನೋಪದೇಶಗಳ ಭಂಡಾರ

7 ಸುಗಂಧತೈಲಕ್ಕಿಂತಲೂ ಒಳ್ಳೆಯ ಹೆಸರೇ ಉತ್ತಮ.
ಜನನ ದಿನಕ್ಕಿಂತಲೂ ಮರಣ ದಿನವೇ ಉತ್ತಮ.
2 ಔತಣಕೂಟಕ್ಕೆ ಹೋಗುವುದಕ್ಕಿಂತ ಶವಸಂಸ್ಕಾರಕ್ಕೆ
ಹೋಗುವುದು ಇನ್ನೂ ಉತ್ತಮ. ಯಾಕೆಂದರೆ
ಎಲ್ಲರೂ ಒಂದು ದಿನ ಸಾಯಲೇಬೇಕು. ಸಾವನ್ನು
ಕಂಡ ಪ್ರತಿಯೊಬ್ಬನು ಇದನ್ನು ಗ್ರಹಿಸಿಕೊಳ್ಳುವರು.
3 ನಗುವಿಗಿಂತ ವ್ಯಸನವು ಇನ್ನೂ ಉತ್ತಮ.
ಯಾಕೆಂದರೆ ನಮ್ಮ ಮುಖವು ವ್ಯಸನದಿಂದಿರುವಾಗ
ನಮ್ಮ ಹೃದಯಕ್ಕೆ ಒಳ್ಳೆಯದಾಗುವುದು.
4 ಜ್ಞಾನಿಯು ಮರಣದ ಬಗ್ಗೆ ಆಲೋಚಿಸುವನು;
ಮೂಢನಾದರೊ ಉಲ್ಲಾಸ ಸಮಯದ ಬಗ್ಗೆ
ಆಲೋಚಿಸುವನು.
5 ಮೂಢನ ಹೊಗಳಿಕೆಗಿಂತ ಜ್ಞಾನಿಯ ಗದರಿಕೆಯೇ
ಉತ್ತಮ.
6 ಮೂಢರ ನಗು ಉಪಯೋಗವಿಲ್ಲದ್ದು. ಅದು
ಮಡಕೆಯ ಕೆಳಗೆ ಚಟಪಟನೆ ಉರಿದುಹೋಗುವ
ಮುಳ್ಳುಕಡ್ಡಿಯಂತಿದೆ.
7 ಹಣವು ಜ್ಞಾನಿಯನ್ನೂ ಮುರ್ಖನನ್ನಾಗಿ ಮಾಡು
ವುದು. ಲಂಚವು ಹೃದಯವನ್ನು ಕೆಡಿಸುವುದು.
8 ಆರಂಭಿಸುವ ಸಮಯಕ್ಕಿಂತಲೂ ಪೂರ್ಣ
ಗೊಳಿಸುವ ಸಮಯವೇ ಮೇಲು. ಗರ್ವಕ್ಕಿಂತಲೂ
ತಾಳ್ಮೆಯೇ ಉತ್ತಮ.
9 ಮುಂಗೋಪಿಯಾಗಿರಬೇಡ. ಯಾಕೆಂದರೆ
ಕೋಪವು ಕೇವಲ ಮೂಢತನ.
10 ''ಈ ಕಾಲಕ್ಕಿಂತ 'ಹಿಂದಿನ ಕಾಲವೇ' ಚೆನ್ನಾಗಿತ್ತ
ಲ್ಲವೇ?'' ಎನ್ನಬೇಡ. ಅದು ಜ್ಞಾನವುಳ್ಳವರ
ಪ್ರಶ್ನೆಯಲ್ಲ.

11ನಿನಗೆ ಆಸ್ತಿಯಿದ್ದರೆ ಜ್ಞಾನವು ಮತ್ತಷ್ಟು ಉಪ
ಯುಕ್ತವಾಗಿದೆ. ನಿಜವಾಗಿಯೂ ಜ್ಞಾನಿಗಳು ಐಶ್ವರ್ಯ
ವನ್ನು ಹೇರಳವಾಗಿ ಪಡೆದುಕೊಳ್ಳುವರು. 12ಜ್ಞಾನಿಯು
ಐಶ್ವರ್ಯನಾಗುವನು; ಜ್ಞಾನವು ತನ್ನ ಯಾಜಮಾನನನ್ನು
ನೋಡಿಕೊಳ್ಳುವುದು.

13ದೇವರ ಕಾರ್ಯಗಳನ್ನು ನೋಡು. ಆತನು ಸೊಟ್ಟಗೆ
ಮಾಡಿದ್ದನ್ನು ನೆಟ್ಟಗೆ ಮಾಡಲು ಯಾರಿಗೆ ಸಾಧ್ಯ?
14ಸುಖದ ದಿನಗಳಲ್ಲಿ ಸಂತೋಷಿಸು. ದುಃಖದ ದಿನ
ಗಳಲ್ಲಿ, ಸುಖದುಃಖಗಳನ್ನು ಕೊಡುವವನು ದೇವರೇ
ಎಂಬುದನ್ನು ಜ್ಞಾಪಿಸಿಕೊ. ಮುಂದೆ ಏನಾಗುವುದೊ
ಯಾರಿಗೂ ಗೊತ್ತಿಲ್ಲ.

15ನನ್ನ ಅಲ್ಪಕಾಲದ ಜೀವನದಲ್ಲಿ ನಾನು ಪ್ರತಿ
ಯೊಂದನ್ನೂ ನೋಡಿದ್ದೇನೆ. ನೀತಿವಂತರು ಯೌವನ
ಪ್ರಾಯದಲ್ಲಿ ಸಾಯುವುದನ್ನೂ ನೋಡಿದ್ದೇನೆ. ದುಷ್ಟರು
ಬಹುಕಾಲ ಬದುಕುವುದನ್ನೂ ನೋಡಿದ್ದೇನೆ. 16-17ಆದ್ದ
ರಿಂದ ನೀನು ನಿನ್ನನ್ನೇ ಯಾಕೆ ನಾಶಮಾಡಿಕೊಳ್ಳುವೆ?
ಬಹಳ ನೀತಿವಂತನಾಗಿಯೂ ಇರಬೇಡ; ಬಹಳ

ಕೆಟ್ಟವನಾಗಿಯೂ ಇರಬೇಡ. ಬಹು ಜ್ಞಾನಿಯಾಗಿಯೂ ಇರಬೇಡ; ಬಹು ಮೂಢನಾಗಿಯೂ ಇರಬೇಡ. ನಿನ್ನ ಕಾಲಕ್ಕಿಂತ ಮೊದಲೇ ನೀನು ಯಾಕೆ ಸಾಯಬೇಕು?

18ಇವೆರಡರಲ್ಲಿಯೂ ಮಿತವಾಗಿರಬೇಕು. ದೇವಭಕ್ತರಲ್ಲಿ ಇವೆರಡೂ ಅತಿಯಾಗಿರುವುದಿಲ್ಲ. 19-20ಒಳ್ಳೆಯದನ್ನೇ ಮಾಡುವ ಮತ್ತು ಪಾಪವನ್ನೇ ಮಾಡದ ನೀತಿವಂತನು ಭೂಮಿಯ ಮೇಲೆ ಇಲ್ಲವೇ ಇಲ್ಲ.

ಜ್ಞಾನವು ಒಬ್ಬನಿಗೆ ಶಕ್ತಿಯನ್ನು ಕೊಡುತ್ತದೆ. ಒಬ್ಬ ಜ್ಞಾನಿಯು ನಗರದಲ್ಲಿರುವ ಹತ್ತು ಮಂದಿ ಮೂಢ ನಾಯಕರುಗಳಿಗಿಂತಲೂ ಬಲಶಾಲಿ.

21ಜನರ ಮಾತಿಗೆಲ್ಲಾ ಕಿವಿಗೊಡಬೇಡ. ನಿನ್ನ ಸ್ವಂತ ಸೇವಕನೇ ನಿನ್ನನ್ನು ಶಪಿಸಬಹುದು. 22ನೀನು ಸಹ ಅನೇಕಸಲ ಬೇರೆಯವರನ್ನು ಶಪಿಸಿರುವುದಕ್ಕೆ ನಿನ್ನ ಮನಸ್ಸೇ ಸಾಕ್ಷಿಯಾಗಿದೆ.

23ನನ್ನ ಜ್ಞಾನದಿಂದ ಇವೆಲ್ಲವುಗಳ ಕುರಿತಾಗಿ ಆಲೋಚಿಸಿದೆನು; ಜ್ಞಾನಿಯಾಗುವೆನು ಎಂದುಕೊಂಡೆನು; ಆದರೆ ಅದು ಅಸಾಧ್ಯವಾಗಿತ್ತು. 24ಪ್ರತಿಯೊಂದೂ ತನ್ನದೇ ಆದ ವಿಶಿಷ್ಟತೆಯನ್ನು ಹೊಂದಿದೆ. ಅದನ್ನು ಅರ್ಥಮಾಡಿಕೊಳ್ಳುವುದಕ್ಕೂ ಕಷ್ಟ. 25ನಿಜವಾದ ಜ್ಞಾನವನ್ನು ಕಂಡುಕೊಳ್ಳಲು ನಾನು ವ್ಯಾಸಾಂಗ ಮಾಡಿದೆ ಮತ್ತು ತುಂಬ ಕಷ್ಟಪಟ್ಟು ಪ್ರಯತ್ನಿಸಿದೆ. ಪ್ರತಿಯೊಂದಕ್ಕೂ ಕಾರಣವನ್ನು ಕಂಡುಕೊಳ್ಳಲು ನಾನು ಪ್ರಯತ್ನಿಸಿದೆ. ನಾನು ಕಲಿತಿದ್ದೇನು?) ಕೆಡುಕನಾಗಿರುವುದು ಮೂಢತನ ಮತ್ತು ಮೂಢನಂತೆ ವರ್ತಿಸುವುದು ಹುಚ್ಚುತನ ಎಂಬುದನ್ನು ನಾನು ಕಲಿತುಕೊಂಡೆ.

26ಇದಲ್ಲದೆ ಕೆಲವು ಸ್ತ್ರೀಯರು ಅಪಾಯಕರವಾದ ಬೋನುಗಳಂತಿರುವರು ಎಂಬುದನ್ನು ನಾನು ಕಂಡುಕೊಂಡೆ. ಅವರ ಹೃದಯಗಳು ಬಲೆಗಳಂತಿವೆ; ಅವರ ಕೈಗಳು ಸರಪಣಿಗಳಂತಿವೆ. ಆ ಸ್ತ್ರೀಯರಿಗೆ ಸಿಕ್ಕಿಬೀಳುವುದು ಮರಣಕ್ಕಿಂತಲೂ ಅಪಾಯಕರ. ದೇವರ ಭಕ್ತನು ಆ ಸ್ತ್ರೀಯರ ಬಳಿಯಿಂದ ಓಡಿಹೋಗುವನು; ಪಾಪಿಯಾದರೂ ಅವರಿಗೆ ಸಿಕ್ಕಿಕೊಳ್ಳುವನು.

27-28ಪ್ರಸಂಗಿಯು ಇಂತೆನ್ನುತ್ತಾನೆ: ‘‘ಒಂದು ತೀರ್ಮಾನಕ್ಕೆ ಬರಬೇಕೆಂದು ಇವೆಲ್ಲವುಗಳನ್ನು ಒಟ್ಟಾಗಿ ಸೇರಿಸಿದೆ. ಆದರೂ ಒಂದು ತೀರ್ಮಾನಕ್ಕೆ ಬರಲಾಗುತ್ತಿಲ್ಲ. ಆದರೆ ನಾನು ಒಂದನ್ನು ಕಂಡುಕೊಂಡೆ. ಅದೇನೆಂದರೆ, ಸಾವಿರ ಪುರುಷರಲ್ಲಿ ಒಬ್ಬ ನೀತಿವಂತನು ಇದ್ದರೂ ಇರಬಹುದು; ಆದರೆ ಸಾವಿರ ಸ್ತ್ರೀಯರಲ್ಲಿ ಒಬ್ಬ ನೀತಿವಂತಳನ್ನೂ ನಾನು ಕಾಣಲಿಲ್ಲ.

29‘‘ನಾನು ಮತ್ತೊಂದು ವಿಷಯವನ್ನು ತಿಳಿದುಕೊಂಡೆನು. ಅದೇನಂದರೆ, ದೇವರು ಮನುಷ್ಯರನ್ನು ನೀತಿವಂತರನ್ನಾಗಿ ಸೃಷ್ಟಿಸಿದನು. ಆದರೆ ಜನರು ಕೆಟ್ಟವರಾಗಿರಲು ಅನೇಕ ದಾರಿಗಳನ್ನು ಕಂಡುಕೊಂಡರು.’’

### ಜ್ಞಾನ ಮತ್ತು ಶಕ್ತಿ

8 ಜ್ಞಾನಿಯು ವಿಷಯಗಳನ್ನು ಅರ್ಥಮಾಡಿಕೊಳ್ಳುವಂತೆ ಮತ್ತು ವಿವರಿಸುವಂತೆ ಬೇರೆ ಯಾರೂ ಅರ್ಥಮಾಡಿಕೊಳ್ಳಲಾರರು ಮತ್ತು ವಿವರಿಸಲಾರರು. ಜ್ಞಾನಿಯ ಮುಖವು ಜ್ಞಾನದಿಂದ ಪ್ರಕಾಶಮಾನವಾಗಿರುವುದು; ಅದು ವ್ಯಸನದ ಮುಖವನ್ನು ಸಂತೋಷದ ಮುಖವನ್ನಾಗಿ ಮಾರ್ಪಡಿಸುವುದು.

2ನೀವು ದೇವರ ಮೇಲೆ ಆಣೆಯಿಟ್ಟಿರುವುದರಿಂದ ರಾಜನ ಆಜ್ಞೆಗೆ ವಿಧೇಯರಾಗಿರಬೇಕು. 3ರಾಜನಿಗೆ ನಿಮ್ಮ ಆಲೋಚನೆಗಳನ್ನು ತಿಳಿಸಲು ಭಯಪಡಬಾರದು; ನೀವು ಯಾವ ತಪ್ಪಿಗೂ ಬೆಂಬಲ ಕೊಡಬಾರದು. ಆದರೆ ರಾಜನು ತನಗೆ ಇಷ್ಟಬಂದಂತೆ ಆಜ್ಞೆಗಳನ್ನು ಕೊಡುತ್ತಾನೆಂಬುದು ಜ್ಞಾಪಕದಲ್ಲಿರಲಿ. 4ಆಜ್ಞೆಗಳನ್ನು ಕೊಡಲು ರಾಜನಿಗೆ ಅಧಿಕಾರವಿದೆ. ಅವನನ್ನು ಬಲವಂತಮಾಡಲು ಯಾರಿಗೂ ಸಾಧ್ಯವಿಲ್ಲ. 5ರಾಜನ ಆಜ್ಞೆಗೆ ವಿಧೇಯನಾಗುವವನು ಸುರಕ್ಷಿತನಾಗಿರುವನು. ಆದರೆ ಜ್ಞಾನಿಯು ಸೂಕ್ತ ಸಮಯದಲ್ಲಿ ಸೂಕ್ತ ಕಾರ್ಯವನ್ನು ಮಾಡಲು ತಿಳಿದಿದ್ದಾನೆ.

6ಪ್ರತಿಯೊಂದು ಕಾರ್ಯಕ್ಕೂ ಸೂಕ್ತ ಸಮಯವೂ ಸೂಕ್ತ ಮಾರ್ಗವೂ ಮನುಷ್ಯನಿಗೆ ಇವೆ. ಮನುಷ್ಯನು ತನ್ನ ಅನೇಕ ತೊಂದರೆಗಳಲ್ಲಿಯೂ ಅವುಗಳಿಗೆ ತಕ್ಕಂತೆ ನಿರ್ಧಾರವನ್ನು ಕೈಕೊಳ್ಳಬೇಕು. 7ಯಾಕೆಂದರೆ ಮುಂದೆ ಏನಾಗುವುದೊ ಅವನಿಗೆ ತಿಳಿಯದು.

8ಯಾರಿಗೂ ತಮ್ಮ ಆತ್ಮವನ್ನು ತಡೆದು ನಿಲ್ಲಿಸಿಕೊಳ್ಳುವ ಶಕ್ತಿ ಇಲ್ಲ. ಯಾರಿಗೂ ತಮ್ಮ ಮರಣವನ್ನು ತಡೆದು ನಿಲ್ಲಿಸುವ ಶಕ್ತಿಯಿಲ್ಲ. ಯುದ್ಧಕಾಲದಲ್ಲಿ ಸೈನಿಕರಿಗೆ ರಜೆ ದೊರೆಯುವುದಿಲ್ಲ. ಅದೇ ರೀತಿಯಲ್ಲಿ,ಪಾಪವು ಪಾಪಿಯನ್ನು ಬಿಟ್ಟುಹೋಗುವುದಿಲ್ಲ.

9ನಾನು ಇವುಗಳನ್ನೆಲ್ಲಾ ನೋಡಿ ಈ ಲೋಕದ ಕಾರ್ಯಗಳನ್ನು ಪರಿಶೀಲಿಸಿದೆನು. ಮನುಷ್ಯರು ಅಧಿಪತಿಗಳಾಗಿರಲು ಪ್ರಯಾಸಪಡುತ್ತಾರೆ ಇದು ಸಹ ವ್ಯರ್ಥ.

10ಇದಲ್ಲದೆ ದುಷ್ಟರಿಗೆ ಶವಸಂಸ್ಕಾರವನ್ನು ವೈಭವದಿಂದ ಮಾಡುವುದನ್ನು ನಾನು ನೋಡಿದ್ದೇನೆ. ಶವಸಂಸ್ಕಾರವಾದ ಮೇಲೆ ಜನರು ಸತ್ತುಹೋದ ದುಷ್ಟರನ್ನು ಹೊಗಳುತ್ತಾ ತಮ್ಮ ಮನೆಗಳಿಗೆ ಹೋದರು; ಆ ದುಷ್ಟರು ಅನೇಕ ಕೆಟ್ಟಕಾರ್ಯಗಳನ್ನು ಮಾಡಿದ್ದ ನಗರಗಳಲ್ಲಿಯೂ ಇದು ನಡೆಯಿತು. ಇದು ಸಹ ವ್ಯರ್ಥ.

### ನ್ಯಾಯ, ಪ್ರತಿಫಲ ಮತ್ತು ದಂಡನೆ

11ಜನರ ಅಪರಾಧಗಳಿಗೆ ದಂಡನೆಯು ಕೂಡಲೇ ಬರದಿರುವುದರಿಂದ ದುಷ್ಕೃತ್ಯಗಳನ್ನು ಮಾಡಲು ಇತರರು ಸಹ ಪ್ರೇರಿತರಾಗುತ್ತಾರೆ.

12ಒಬ್ಬ ಪಾಪಿಯು ನೂರು ದುಷ್ಕೃತ್ಯಗಳನ್ನು ಮಾಡಿ
ಬಹುಕಾಲ ಬದುಕಬಹುದು. ಆದರೆ ದೇವರಲ್ಲಿ ಭಯ
ಭಕ್ತಿಯುಳ್ಳವರಿಗೆ ಅದಕ್ಕಿಂತಲೂ ಮೇಲೇ ಆಗುವುದು.
13ದುಷ್ಟರಿಗೆ ದೇವರಲ್ಲಿ ಭಯಭಕ್ತಿಯಿಲ್ಲದಿರುವುದರಿಂದ
ಅವರಿಗೆ ಒಳ್ಳೆಯದಾಗುವುದುದಿಲ್ಲ; ಅವರ ಜೀವಿತವು
ಸಾಯಂಕಾಲದ ನೆರಳಿನಂತೆ ಇಲ್ಲವಾಗುವುದು.

14ಲೋಕದಲ್ಲಿ ಮತ್ತೊಂದು ಅನ್ಯಾಯವಿದೆ. ದುಷ್ಟರಿಗೆ
ಕೇಡಾಗಬೇಕು, ಕೆಟ್ಟವುಗಳು ಕೆಟ್ಟ ಜನರಿಗೆ ಆಗಬೇಕು.
ನೀತಿವಂತರಿಗೆ ಒಳ್ಳೆಯದಾಗಬೇಕು. ಆದರೆ ಕೆಲವು ಸಲ
ನೀತಿವಂತರಿಗೆ ಕೇಡಾಗುತ್ತದೆ, ದುಷ್ಟರಿಗೆ ಒಳ್ಳೆಯ
ದಾಗುತ್ತದೆ. ಅದು ನ್ಯಾಯವಲ್ಲ.

15ಆದ್ದರಿಂದ ಜೀವನದಲ್ಲಿ ಅನ್ನಪಾನಗಳನ್ನು ತೆಗೆದು
ಕೊಂಡು ಸಂತೋಷಪಡುವುದೇ ಉತ್ತಮವೆಂದು ನಿರ್ಧ
ರಿಸಿದೆನು. ಯಾಕೆಂದರೆ ದೇವರು ಮನುಷ್ಯನಿಗೆ ಈ
ಲೋಕದಲ್ಲಿ ಅನುಗ್ರಹಿಸಿರುವ ಪ್ರಯಾಸಕರ ಕೆಲಸ
ಗಳಲ್ಲಿಯೂ ಮನಷ್ಯನು ಸಂತೋಷವಾಗಿರಬೇಕು.

### ದೇವರ ಕಾರ್ಯ ಗ್ರಹಿಕೆಗೆ ಮೀರಿದೆ

16ಈ ಲೋಕದಲ್ಲಿ ಜನರ ಕಾರ್ಯಗಳನ್ನು ಎಚ್ಚರಿಕೆ
ಯಿಂದ ಅಧ್ಯಯನ ಮಾಡಿದೆ. ಅವರು ಹಗಲುರಾತ್ರಿ
ಕೆಲಸ ಮಾಡುವರು; ಕೆಲವೊಮ್ಮೆ ನಿದ್ರೆಯನ್ನೂ
ಮಾಡುವುದಿಲ್ಲ. 17ಇದಲ್ಲದೆ ದೇವರ ಅನೇಕ ಕಾರ್ಯ
ಗಳನ್ನು ಸಹ ನಾನು ನೋಡಿದ್ದೇನೆ. ಭೂಮಿಯ ಮೇಲೆ
ದೇವರು ಮಾಡುವ ಕಾರ್ಯಗಳನ್ನೆಲ್ಲಾ ಜನರು ಅರ್ಥ
ಮಾಡಿಕೊಳ್ಳಲಾರರು. ಒಬ್ಬನು ಅರ್ಥಮಾಡಿಕೊಳ್ಳಲು
ಎಷ್ಟೇ ಪ್ರಯತ್ನಿಸಿದರೂ ಅವನು ಅರ್ಥಮಾಡಿಕೊಳ್ಳ
ಲಾರನು. ದೇವರ ಕಾರ್ಯವನ್ನು ಅರ್ಥಮಾಡಿಕೊಳ್ಳ
ಬಲ್ಲನೆಂದು ಜ್ಞಾನಿಯು ಕೇಳಿಕೊಂಡರೂ ಅದು
ಸತ್ಯವಲ್ಲ. ಅವುಗಳನ್ನೆಲ್ಲ ಯಾರೂ ಅರ್ಥಮಾಡಿ
ಕೊಳ್ಳಲಾರರು.

### ಸಾವು ನ್ಯಾಯವಾದದ್ದೇ?

9 ನಾನು ಇವೆಲ್ಲವುಗಳ ಬಗ್ಗೆ ಬಹಳ ಎಚ್ಚರಿಕೆಯಿಂದ
ಆಲೋಚಿಸಿದೆ. ಒಳ್ಳೆಯವರಿಗೂ ಜ್ಞಾನಿಗಳಿಗೂ
ಅವರ ಕಾರ್ಯಗಳಿಗೂ ಸಂಭವಿಸುವುದೆಲ್ಲಾ ದೇವರ
ಹತೋಟಿಯಲ್ಲಿದೆ. ತಾವು ಪ್ರೀತಿಗೆ ಗುರಿಯಾಗುವರೊ
ದ್ವೇಷಕ್ಕೆ ಗುರಿಯಾಗುವರೊ ಅವರಿಗೆ ಗೊತ್ತಿಲ್ಲ. ಮುಂದೆ
ಸಂಭವಿಸುವುದೂ ಅವರಿಗೆ ಗೊತ್ತಿಲ್ಲ.

2ಆದರೆ ಎಲ್ಲರಿಗೂ ಸಂಭವಿಸುವುದು ಒಂದೇ. ಅದೇ
ಮರಣ. ಒಳ್ಳೆಯವರಿಗೂ ಕೆಟ್ಟವರಿಗೂ ಶುದ್ಧರಿಗೂ
ಅಶುದ್ಧರಿಗೂ ಯಜ್ಞಗಳನ್ನು ಅರ್ಪಿಸುವವರಿಗೂ ಅರ್ಪಿಸ
ದವರಿಗೂ ಮರಣವಾಗುತ್ತದೆ. ಒಳ್ಳೆಯವನು ಸಹ ಕೇವಲ
ಪಾಪಿಯಂತೆ ಸಾಯುವನು. ದೇವರಿಗೆ ವಿಶೇಷವಾದ
ಹರಕೆಗಳನ್ನು ಮಾಡುವವನು ಸಹ ಆ ಹರಕೆಗಳನ್ನು
ಮಾಡಲು ಭಯಪಡುವ ವ್ಯಕ್ತಿಯಂತೆ ಸಾಯುವನು.

3ಈ ಲೋಕದ ಎಲ್ಲಾ ಕಾರ್ಯಗಳಲ್ಲಿ ಎಲ್ಲಕ್ಕಿಂತಲೂ
ದುಃಖಕರವಾದದ್ದೇನಂದರೆ, ಎಲ್ಲರೂ ಒಂದೇ ರೀತಿ
ಯಲ್ಲಿ ಅಂತ್ಯವಾಗುವರು. ಆದರೆ ಜನರು ದುಷ್ಟತನ
ವನ್ನೂ ಮೂರ್ಖತನವನ್ನೂ ಆಲೋಚಿಸುತ್ತಲೇ
ಇರುವುದು ಅಪಾಯಕರ. ಆಲೋಚನೆಗಳು ಅವರನ್ನು
ಮರಣಕ್ಕೆ ನಡೆಸುತ್ತವೆ. 4ಇನ್ನೂ ಜೀವದಿಂದಿರುವ
ಪ್ರತಿಯೊಬ್ಬರಿಗೂ ನಿರೀಕ್ಷೆಯಿದೆ.

ಜೀವಂತವಾಗಿರುವ ನಾಯಿ ಸತ್ತ ಸಿಂಹಕ್ಕಿಂತಲೂ
ಉತ್ತಮ ಎಂಬ ನುಡಿ ಎಷ್ಟೋ ಸತ್ಯ.

5ಜೀವಿತರಿಗೆ ಸಾಯುತ್ತೇವೆಂಬ ತಿಳಿವಳಿಕೆಯಿದೆ. ಆದರೆ
ಸತ್ತವರಿಗೆ ಯಾವ ತಿಳಿವಳಿಕೆಯೂ ಇಲ್ಲ. ಸತ್ತವರಿಗೆ
ಯಾವ ಪ್ರತಿಫಲವೂ ಇಲ್ಲ. ಜನರು ಅವರನ್ನು ಬೇಗನೆ
ಮರೆತುಬಿಡುವರು. 6ಅವರು ಸತ್ತಾಗಲೇ, ಅವರ ಪ್ರೀತಿ,
ದ್ವೇಷ ಮತ್ತು ಹೊಟ್ಟೆಕಿಚ್ಚು ಅಳಿದು ಹೋದವು; ಸತ್ತವರು
ಭೂಲೋಕದ ಕಾರ್ಯಗಳಲ್ಲಿ ಇನ್ನೆಂದಿಗೂ ಪಾಲುಗಾರ
ರಾಗುವುದಿಲ್ಲ.

### ಜೀವನದಲ್ಲಿ ಆನಂದಿಸಿ

7ಆದ್ದರಿಂದ ಹೋಗು, ಊಟಮಾಡಿ ಸಂತೋಷಪಡು;
ದ್ರಾಕ್ಷಾರಸವನ್ನು ಕುಡಿದು ಉಲ್ಲಾಸಿಸು; ನಿನ್ನ ಈ ನಡ
ತೆಯು ದೇವರಿಗೆ ಮೆಚ್ಚಿಕೆಯಾಗಿದೆ. 8ಒಳ್ಳೆಯ ಉಡುಪು
ಗಳನ್ನು ಧರಿಸಿಕೊಂಡು ನಿನ್ನನ್ನು ಅಲಂಕರಿಸಿಕೊ. 9ನೀನು
ಪ್ರಿಯ ಪತ್ನಿಯೊಡನೆ ಸುಖಪಡು. ನಿನ್ನ ಅಲ್ಪಕಾಲ
ಜೀವಿತದ ದಿನಗಳಲ್ಲೆಲ್ಲಾ ಸುಖಪಡು. ಈ ಜೀವಿತವನ್ನು
ನಿನಗೆ ಅನುಗ್ರಹಿಸಿರುವಾತನು ದೇವರೇ. ಇದೇ ನಿನ್ನ
ಪಾಲು. ನಿನ್ನ ಈ ಜೀವಿತದ ಕೆಲಸಕಾರ್ಯಗಳನ್ನು
ಸಂತೋಷದಿಂದ ಮಾಡು. 10ನಿನ್ನ ಕೆಲಸ ಕಾರ್ಯಗಳನ್ನು
ನಿನ್ನಿಂದಾದಷ್ಟು ಉತ್ತಮವಾಗಿ ಮಾಡು. ಸಮಾಧಿಯಲ್ಲಿ
ನಿನಗೆ ಕೆಲಸವಿಲ್ಲ. ಅಲ್ಲಿ ಆಲೋಚನೆಯಾಗಲೀ, ಜ್ಞಾನ
ವಾಗಲೀ, ವಿವೇಕವಾಗಲೀ ಇರುವುದಿಲ್ಲ. ನಾವೆಲ್ಲರೂ
ಮರಣದ ಆ ಸ್ಥಳಕ್ಕೆ ಹೋಗುತ್ತಿದ್ದೇವೆ.

### ಆದೃಷ್ಟವೇ? ನತಾದೃಷ್ಟವೇ?

11ಇದಲ್ಲದೆ ಲೋಕದಲ್ಲಿ ಇನ್ನೂ ಕೆಲವು ಅನ್ಯಾಯ
ಗಳನ್ನು ಗಮನಿಸಿದ್ದೇನೆ. ಅತಿವೇಗದ ಓಟಗಾರನಿಗೆ
ಓಟದಲ್ಲಿ ಯಾವಾಗಲೂ ಗೆಲುವಾಗದು; ಬಲಿಷ್ಠವಾದ
ಸೈನ್ಯಕ್ಕೆ ಯುದ್ಧದಲ್ಲಿ ಯಾವಾಗಲೂ ಜಯವಾಗದು;
ಜ್ಞಾನಿಗೆ ಯಾವಾಗಲೂ ಆಹಾರ ದೊರಕದು; ಜಾಣನಿಗೆ
ಯಾವಾಗಲೂ ಐಶ್ವರ್ಯ ದೊರೆಯದು; ಪ್ರವೀಣರಿಗೆ

ಯಾವಾಗಲೂ ಹೊಗಳಿಕೆ ಬಾರದು; ಸಮಯ ಬಂದಾಗ,
ಪ್ರತಿಯೊಬ್ಬರಿಗೂ ಕೇಡುಗಳಾಗುತ್ತವೆ.
12ಮನುಷ್ಯನಿಗೆ ಮುಂದೆ ಏನಾಗುವುದೊ ತಿಳಿಯದು.
ಅವನ ಬಲೆಯಲ್ಲಿ ಸಿಕ್ಕಿಕೊಂಡಿರುವ ಮೀನಿನಂತೆಯೂ
ಬೋನಿನಲ್ಲಿ ಸಿಕ್ಕಿಕೊಂಡ ಪಕ್ಷಿಯಂತೆಯೂ ಮನುಷ್ಯನು
ತನಗೆ ಸಂಭವಿಸುವ ಕೇಡುಗಳಿಗೆ ಗುರಿಯಾಗುವನು.

### ಜ್ಞಾನದ ಶಕ್ತಿ

13ಇದಲ್ಲದೆ ಲೋಕದಲ್ಲಿ ಜ್ಞಾನದ ಕಾರ್ಯವನ್ನು
ಮಾಡುವ ಒಬ್ಬನನ್ನು ನಾನು ಕಂಡೆನು. ಅದು ತುಂಬ
ಮುಖ್ಯವಾದದ್ದೆಂದು ನನಗೆ ತೋರಿತು. 14ಕೆಲವು ಜನ
ರಿದ್ದ ಒಂದು ಚಿಕ್ಕ ನಗರವಿತ್ತು. ಒಬ್ಬ ದೊಡ್ಡ ರಾಜನು ಆ
ನಗರದ ಮೇಲೆ ದಂಡೆತ್ತಿ ಬಂದು ಮುತ್ತಿಗೆ ಹಾಕಿದನು.
15ಆದರೆ ಆ ನಗರದಲ್ಲಿ ಒಬ್ಬ ಜ್ಞಾನಿ ಇದ್ದನು. ಆದರೆ
ಅವನು ಬಡವನಾಗಿದ್ದನು, ಅವನು ತನ್ನ ಜ್ಞಾನದಿಂದ ಆ
ನಗರವನ್ನು ಕಾಪಾಡಿದನು; ಆದರೆ ಜನರು ಅವನನ್ನು
ಮರತೇಬಿಟ್ಟರು. 16ನಾನು ಹೇಳುವುದೇನಂದರೆ,
ಜ್ಞಾನವು ಶಕ್ತಿಗಿಂತಲೂ ಉತ್ತಮ. ಅವರು ಆ ಬಡವನ
ಜ್ಞಾನವನ್ನು ಮರೆತುಬಿಟ್ಟರೂ ಅವನ ಮಾತುಗಳನ್ನು
ಕೇಳದಿದ್ದರೂ ಜ್ಞಾನವು ಉತ್ತಮವಾದದ್ದೇ.

17 ಜ್ಞಾನಿಯ ಮೆಲ್ಲನೆಯ ಮಾತುಗಳು ಮೂಢನಾದ
ಅಧಿಪತಿಯು ಕೂಗಿಹೇಳಿದ ಮಾತುಗಳಿಗಿಂತಲೂ
ಎಷ್ಟೋ ಉತ್ತಮ.
18 ಜ್ಞಾನವು ಯುದ್ಧಾಯುಧಗಳಿಗಿಂತಲೂ ಉತ್ತಮ,
ಆದರೆ ಮೂಢನು ಒಳ್ಳೆಯದನ್ನು ಹಾಳು
ಮಾಡುವನು.

10 ಸತ್ತ ನೊಣಗಳಿಂದ ಉತ್ತಮವಾದ ಪರಿಮಳ
ತೈಲವು ದುರ್ವಾಸನೆ ಬೀರುವುದು. ಅದೇರೀತಿ
ಯಲ್ಲಿ ಚಿಕ್ಕ ಮೂಢತನವು ಬಹು ಜ್ಞಾನವನ್ನೂ
ಸನ್ಮಾನವನ್ನೂ ಹಾಳುಮಾಡಬಲ್ಲದು.
2ಜ್ಞಾನಿಯ ಆಲೋಚನೆಗಳು ಅವನನ್ನು ಸರಿಯಾದ
ದಾರಿಯಲ್ಲಿ ನಡೆಸುತ್ತವೆ. ಆದರೆ ಮೂಢನ ಆಲೋಚನೆ
ಗಳು ಅವನನ್ನು ತಪ್ಪಾದ ದಾರಿಯಲ್ಲಿ ನಡೆಸುತ್ತವೆ.
3ಮೂಢನು ತನ್ನ ಮೂಢತನವನ್ನು ದಾರಿಯಲ್ಲಿ
ನಡೆದುಹೋಗುತ್ತಿರುವಾಗಲೂ ತೋರಿಸುವನು.
4ನಿನ್ನ ಯಾಜಮಾನನು ನಿನ್ನ ಮೇಲೆ ಕೋಪಗೊಂಡ
ಮಾತ್ರಕ್ಕೆ ನಿನ್ನ ಉದ್ಯೋಗವನ್ನು ಬಿಡಬೇಡ. ನೀನು
ತಾಳ್ಮೆಯಿಂದ ಸಹಾಯಕನಾಗಿದ್ದರೆ ದೊಡ್ಡ ತಪ್ಪುಗಳನ್ನು
ಸಹ ನೀನು ಸರಿಪಡಿಸಲು ಸಾಧ್ಯ.
5ಲೋಕದಲ್ಲಿ ನಾನು ಮತ್ತೊಂದು ಅನ್ಯಾಯವನ್ನು
ನೋಡಿದ್ದೇನೆ. ಅದು ಅಧಿಪತಿಗಳು ಮಾಡುವ ತಪ್ಪಿನಂತೆ
ಇದೆ. 6ಐಶ್ವರ್ಯವಂತರಿಗೆ ಹೀನವಾದ ಸ್ಥಾನ ದೊರೆಯು
ವುದು; ಮೂಢರಿಗೆ ಮುಖ್ಯವಾದ ಪದವಿಗಳು ದೊರೆಯು
ವವು. 7ಸೇವಕರಾಗಿರಬೇಕಿದ್ದವರು ಕುದುರೆಸವಾರಿ
ಮಾಡುವುದನ್ನೂ ಅಧಿಪತಿಗಳಾಗಬೇಕಿದ್ದವರು ಸೇವಕ
ರಂತೆ ನಡೆದುಹೋಗುವುದನ್ನು ನಾನು ನೋಡಿದ್ದೇನೆ.

### ಪ್ರತಿಯೊಂದು ಉದ್ಯೋಗವೂ ಅಪಾಯಕರ

8ಗುಂಡಿತೋಡುವವನು ತಾನೇ ಅದರಲ್ಲಿ ಬೀಳ
ಬಹುದು. ಗೋಡೆಯನ್ನು ಹೊಡೆದು ಉರುಳಿಸುವವ
ನನ್ನು ಹಾವು ಕಚ್ಚುವುದು. 9ಬಂಡೆಗಳನ್ನು ಉರುಳಿಸುವವ
ನಿಗೆ ನೋವಾಗುವುದು; ಮರಗಳನ್ನು ಕಡಿಯುವವನಿಗೆ
ಕೇಡಾಗುವುದು.
10ಮೊಂಡಕತ್ತಿಯನ್ನು ಹರಿತಗೊಳಿಸಿದರೆ ಕೆಲಸ
ಸುಲಭವಾಗುವಂತೆಯೇ ಜ್ಞಾನವು ಯಾವ ಕೆಲಸವನ್ನಾ
ದರೂ ಸುಲಭಗೊಳಿಸಬಲ್ಲದು. 11ಹಾವುಗಳನ್ನು ಹಿಡಿಯ
ಬಲ್ಲವನು ಇಲ್ಲದಿರುವಾಗ ಹಾವು ಬೇರೊಬ್ಬನನ್ನು
ಕಚ್ಚಿದರೆ ಹಾವು ಹಿಡಿಯುವವನಿಂದ ಪ್ರಯೋಜನ
ವೇನು? ಜ್ಞಾನವು ಸಹ ಹಾಗಯೇ.

12 ಜ್ಞಾನಿಯು ಮಾತುಗಳು ಅವನಿಗೆ ಘನತೆಯನ್ನು
ತರುತ್ತವೆ; ಮೂಢನ ಮಾತುಗಳು ಅವನಿಗೆ
ನಾಶನವನ್ನು ತರುತ್ತವೆ.

13ಮೂಢನ ಮಾತು ಮೂರ್ಖತನದೊಡನೆ ಆರಂಭ
ಗೊಂಡು ದುಷ್ಟಕರವಾದ ಹುಚ್ಚುತನದೊಡನೆ ಕೊನೆ
ಗೊಳ್ಳುವುದು. 14ಮೂಢನು ತಾನು ಮಾಡುವಂಥದ್ದರ
ಬಗ್ಗೆ ಯಾವಾಗಲೂ ಮಾತಾಡುವನು. ಆದರೆ ಮುಂದೆ
ಏನಾಗುವುದೊ ಯಾರಿಗೂ ತಿಳಿಯದು. ಮುಂದೆ
ಸಂಭವಿಸುವುದನ್ನು ಯಾರೂ ಹೇಳಲಾರರು.

15 ಮೂಢನು ತನ್ನ ಮನೆದಾರಿಯನ್ನು ತಿಳಿದು
ಕೊಳ್ಳುವಷ್ಟು ಜಾಣನಲ್ಲ, ಆದ್ದರಿಂದ ಅವನು
ತನ್ನ ಜೀವಮಾನವೆಲ್ಲಾ ಕಷ್ಟಪಟ್ಟು ಕೆಲಸ
ಮಾಡಬೇಕು.

### ದುಡಿಮೆಯ ಮೌಲ್ಯ

16ರಾಜನು ಮಗುವಿನಂತೆ ಇದ್ದರೆ ದೇಶವು ಹಾಳಾ
ಗುವುದು. ಅಧಿಪತಿಗಳು ಮುಂಜಾನೆಯಲ್ಲಿಯೇ ಔತಣ
ಮಾಡಿದರೆ ದೇಶವು ಹಾಳಾಗುವುದು. 17ಆದರೆ ರಾಜನು
ಒಳ್ಳೆಯ ಕುಟುಂಬದಿಂದ ಬಂದವನಾಗಿದ್ದರೆ ದೇಶಕ್ಕೆ
ತುಂಬ ಒಳ್ಳೆಯದಾಗುವುದು; ಅಧಿಪತಿಗಳು ತಿನ್ನುವು
ದನ್ನೂ ಕುಡಿಯುವುದನ್ನೂ ಹತೋಟಿಯಲ್ಲಿಟ್ಟು

ಕೊಂಡರೆ ದೇಶಕ್ಕೆ ತುಂಬ ಒಳ್ಳೆಯದಾಗುವುದು. ಅಧಿಪತಿ
ಗಳು ತಿನ್ನುವುದೂ ಕುಡಿಯುವುದೂ ಬಲ ಹೊಂದುವು
ದಕ್ಕಾಗಿಯೇ ಹೊರತು ಮತ್ತರಾಗುವುದಕ್ಕಾಗಿಯಲ್ಲ.

18 ಒಬ್ಬನು ಕೆಲಸಮಾಡಲಾರದಷ್ಟು ತುಂಬ
ಸೋಮಾರಿಯಾಗಿದ್ದರೆ, ಅವನ ಮನೆಯು
ಸೋರಲಾರಂಭಿಸುವುದು; ಅದರ ಮೇಲ್ಛಾ
ವಣಿಗೆಯು ಬೀಳತೊಡಗುವುದು.

19 ಊಟವು ಸಂತೋಷಗೊಳಿಸುವುದು; ದ್ರಾಕ್ಷರಸವು
ಉಲ್ಲಾಸಗೊಳಿಸುವುದು; ಹಣವು ಅನೇಕ ಸಮಸ್ಯೆಗಳನ್ನು
ಬಗೆಹರಿಸುವುದು.

### ಹರಟೆ ಮಾತು

20 ರಾಜನನ್ನು ಮನಸ್ಸಿನಲ್ಲಿಯೂ ದೂಷಿಸಬೇಡ; ನಿನ್ನ
ಮನೆಯಲ್ಲಿ ಒಬ್ಬಂಟಿಗನಾಗಿರುವಾಗಲೂ ಐಶ್ವರ್ಯ
ವಂತರನ್ನು ದೂಷಿಸಬೇಡ. ಯಾಕೆಂದರೆ ಚಿಕ್ಕ ಪಕ್ಷಿ
ಯೊಂದು ಹಾರಿಹೋಗಿ, ನೀನು ಹೇಳಿದ ಪ್ರತಿ
ಯೊಂದನ್ನು ಅವರಿಗೆ ಹೇಳಬಹುದು.

### ಭವಿಷ್ಯತ್ತನ್ನು ಧೈರ್ಯವಾಗಿ ಎದುರಿಸಿ

11 ನೀನು ಹೋದಲ್ಲೆಲ್ಲಾ ಒಳ್ಳೆಯದನ್ನೇ ಮಾಡು.
ಸ್ವಲ್ಪಕಾಲದ ಮೇಲೆ, ನಿನ್ನ ಸತ್ಕ್ರಿಯೆಗಳ ಫಲವನ್ನು
ಹೊಂದಿಕೊಳ್ಳುವೆ.
2 ನಿನ್ನಲ್ಲಿರುವುದನ್ನೆಲ್ಲ ಒಳ್ಳೆಯ ಕಾರ್ಯಗಳಿಗೆ ಉಪ
ಯೋಗಿಸು; ಲೋಕಕ್ಕೆ ಮುಂದೆ ಸಂಭವಿಸುವ ಕೇಡು
ನಿನಗೆ ತಿಳಿಯದು.
3 ಮೋಡಗಳು ನೀರಿನಿಂದ ತುಂಬಿದ್ದರೆ, ಅವು
ಭೂಮಿಯ ಮೇಲೆ ಮಳೆಯನ್ನು ಸುರಿಸುತ್ತವೆ. ಮರವು
ದಕ್ಷಿಣಕ್ಕಾಗಲೀ ಉತ್ತರಕ್ಕಾಗಲೀ ಬಿದ್ದರೆ, ಅದು ತಾನು
ಬಿದ್ದಲ್ಲಿಯೇ ಇರುವುದು.
4 ಒಳ್ಳೆಯ ಹವಾಮಾನಕ್ಕಾಗಿ ಕಾದುಕೊಂಡಿರುವವನು
ಬೀಜ ಬಿತ್ತುವುದಿಲ್ಲ; ಮಳೆ ಬರಬಹುದೆಂದು ಮೋಡ
ವನ್ನು ನೋಡುತ್ತಿರುವವನು ಪೈರು ಕೊಯ್ಯನು.
5 ಗಾಳಿಯ ಬೀಸುವಿಕೆಯನ್ನೂ ತನ್ನ ತಾಯಿಯ
ಗರ್ಭದಲ್ಲಿ ಮಗುವಿನ ಎಲುಬು ಬೆಳೆಯುವ ರೀತಿಯನ್ನು
ನೀನು ಹೇಗೆ ತಿಳಿದಿಲ್ಲವೊ ಅದೇ ರೀತಿಯಲ್ಲಿ ಸೃಷ್ಟಿಕರ್ತನ
ಕಾರ್ಯಗಳನ್ನು ನೀನು ಅರಿತುಕೊಳ್ಳಲಾರೆ.
6 ಆದ್ದರಿಂದ ಮುಂಜಾನೆಯಲ್ಲಿ ಬೀಜಬಿತ್ತಲು
ಆರಂಭಿಸು; ಸಾಯಂಕಾಲದತನಕ ಕೆಲಸಮಾಡುವುದನ್ನು
ನಿಲ್ಲಿಸಬೇಡ. ಯಾಕೆಂದರೆ ಇದು ಸಫಲವಾಗುವುದೋ
ಅದು ಸಫಲವಾಗುವುದೋ ಒಂದುವೇಳೆ ಎರಡೂ
ಸಫಲವಾಗುವುದೋ ನಿನಗೆ ತಿಳಿಯದು.
7 ಬೆಳಕು ಹಿತ! ಸೂರ್ಯನ ಬೆಳಕು ನೋಡಲು ಚೆಂದ.
8 ನಿನ್ನ ಜೀವನದ ಪ್ರತಿಯೊಂದು ದಿನದಲ್ಲಿಯೂ
ಆನಂದಿಸು. ನೀನು ಎಷ್ಟು ಕಾಲ ಬದುಕುವೆ ಎಂಬುದು
ಮುಖ್ಯವಲ್ಲ. ಆದರೆ ಕತ್ತಲೆಯ ದಿನಗಳು ಬಹಳವೆಂದು
ಜ್ಞಾಪಕದಲ್ಲಿಟ್ಟುಕೊ. ಮುಂದೆ ಸಂಭವಿಸುವುದೆಲ್ಲಾ
ವ್ಯರ್ಥವೇ.

### ಯೌವನದಲ್ಲಿ ದೇವರ ಸೇವೆ ಮಾಡಿ

9 ಆದ್ದರಿಂದ ಯೌವನಸ್ಥರೇ, ನಿಮ್ಮ ಯೌವನ ಕಾಲ
ದಲ್ಲಿ ಆನಂದಿಸಿರಿ! ಸಂತೋಷವಾಗಿರಿ! ನಿಮ್ಮ ಹೃದಯವು
ನಿಮ್ಮನ್ನು ನಡೆಸಿದಂತೆ ಮಾಡಿರಿ. ನೀವು ಬಯಸು
ವುದನ್ನೆಲ್ಲಾ ಮಾಡಿರಿ. ಆದರೆ ನೀವು ಮಾಡುವ ಪ್ರತಿ
ಯೊಂದಕ್ಕೂ ದೇವರು ನಿಮಗೆ ನ್ಯಾಯತೀರಿಸುವನು
ಎಂಬುದು ನೆನಪಿನಲ್ಲಿಟ್ಟುಕೊಳ್ಳಿರಿ.
10 ನಿಮ್ಮ ಕೋಪವು
ನಿಮ್ಮನ್ನು ಹತೋಟಿಯಲ್ಲಿಡದಂತೆ ನೋಡಿಕೊಳ್ಳಿರಿ.
ನಿಮ್ಮ ದೇಹವು ನಿಮ್ಮನ್ನು ಪಾಪಕ್ಕೆ ನಡೆಸದಂತೆ
ನೋಡಿಕೊಳ್ಳಿರಿ. ಜನರು ಯೌವನಪ್ರಾಯದಲ್ಲಿರು
ವಾಗ, ಜೀವನದ ಆರಂಭದಲ್ಲಿಯೇ ಮೂಢಕಾರ್ಯ
ಗಳನ್ನು ಮಾಡುವರು.

12 ಕಷ್ಟಕಾಲಗಳು ಬರುವುದಕ್ಕಿಂತ ಮೊದಲೇ,
ವರ್ಷಗಳು ಮುಗಿದು, ‘‘ನನಗೆ ಅವುಗಳಲ್ಲಿ ಸುಖ
ವಿಲ್ಲ’’ ಎಂದು ಹೇಳುವ ಕಾಲ ಬರುವುದಕ್ಕಿಂತ ಮೊದಲೇ
ಯೌವನಪ್ರಾಯದಲ್ಲಿ ನಿನ್ನ ಸೃಷ್ಟಿಕರ್ತನನ್ನು ಜ್ಞಾಪಿಸಿಕೊ.

### ಮುಪ್ಪಿನ ಸಮಸ್ಯೆಗಳು

2 ನೀನು ಮುದುಕನಾದಾಗ, ಸೂರ್ಯ, ಚಂದ್ರ, ನಕ್ಷತ್ರ
ಗಳ ಬೆಳಕು ನಿನಗೆ ಕತ್ತಲೆಯಂತೆ ಕಾಣುತ್ತದೆ. ಮಳೆಯಾದ
ಮೇಲೆಯೂ ಮತ್ತೆಮತ್ತೆ ಮೋಡಗಳಂತೆ ನಿನ್ನ ಜೀವನ
ದಲ್ಲಿ ಕಷ್ಟಗಳು ತುಂಬಿರುತ್ತವೆ.
3 ಆ ಸಮಯದಲ್ಲಿ, ನಿನ್ನ ಬಲಿಷ್ಠವಾದ ತೋಳುಗಳು
ಶಕ್ತಿಯನ್ನು ಕಳೆದುಕೊಳ್ಳುತ್ತವೆ; ನಿನ್ನ ಬಲಿಷ್ಟವಾದ ಕಾಲು
ಗಳು ಬಲಹೀನವಾಗಿ ಬಗ್ಗಿಹೋಗುತ್ತವೆ; ನಿನ್ನ ಹಲ್ಲುಗಳು
ಬಿದ್ದುಹೋಗುತ್ತವೆ; ಆಗ ನೀನು ಆಹಾರವನ್ನು ಅಗಿದು
ತಿನ್ನಲಾರೆ. ನಿನ್ನ ಕಣ್ಣುಗಳು ಮೊಬ್ಬಾಗುತ್ತವೆ.
4 ನಿನ್ನ ಕಿವಿ
ಮಂದವಾಗುತ್ತದೆ. ನೀನು ಮಾರುಕಟ್ಟೆಯ ಶಬ್ದವನ್ನೂ
ಕೇಳಲಾರೆ. ಅರೆಯುವ ಕಲ್ಲು ಸಹ ನಿನಗೆ ತುಂಬ
ಮೌನವಾಗಿದೆಯೊ ಎಂಬಂತೆ ತೋರುವುದು. ಗಾಯ
ನವೂ ನಿನಗೆ ಕೇಳುವುದಿಲ್ಲ. ನಿನಗೆ ನಿದ್ರೆಬಾರದಿ
ರುವುದರಿಂದ ಕೇವಲ ಒಂದು ಹಕ್ಕಿಯ ಧ್ವನಿಯು ನಿನ್ನನ್ನು
ಹೊತ್ತಾರೆಯಲ್ಲಿ ಎಬ್ಬಿಸುವುದು.

[5]ನೀನು ಎತ್ತರವಾದ ಸ್ಥಳಗಳ ಬಗ್ಗೆ ಭಯದಿಂದಿರುವೆ; ನಿನ್ನ ಹಾದಿಯಲ್ಲಿರುವ ಪ್ರತಿಯೊಂದು ಚಿಕ್ಕ ವಸ್ತುವಿಗೂ ಹೆದರಿಕೊಂಡು ನಡೆದಾಡುವೆ. ನಿನ್ನ ಕೂದಲು ಬಾದಾಮಿ ಮರದ ಹೂವುಗಳಂತೆ ಬಿಳುಪಾಗುವುದು. ನೀನು ನಡೆಯುವಾಗ ಮಿಡತೆಯಂತೆ ನಿನ್ನನ್ನು ಎಳೆದಾಡಿ ಕೊಂಡು ನಡೆಯುವೆ; ಮಗುವನ್ನು ಪಡೆಯಲಾರದಷ್ಟು ವಯಸ್ಸಾಗುವುದು.

ಆ ಮೇಲೆ ನೀನು ನಿನ್ನ ಹೊಸಮನೆಗೆ (ಸಮಾಧಿಗೆ) ಹೋಗುವೆ. ನಿನ್ನ ಶವಸಂಸ್ಕಾರಕ್ಕೆ ಹೋಗಲು ಜನರು ಬೀದಿಗಳಲ್ಲಿ ತುಂಬಿರುವರು.

### ಮರಣ

6 ನಿನ್ನ ಜೀವನ ಮುಖ್ಯವಾದದ್ದು. ನಿನ್ನ ಜೀವನ
ಬೆಳ್ಳಿಬಂಗಾರಗಳಂತೆ ಬೆಲೆ ಬಾಳುವಂಥದ್ದು.
ಆದರೆ, ಅದು ಬಹು ಬೇಗನೆ ತುಂಡಾದ ದಾರ
ದಂತೆಯೂ ಮುರಿದುಹೋದ ಪಾತ್ರೆಯಂತೆಯೂ
ಆಗುವುದು. ನಿನ್ನ ಜೀವನ ಬಾವಿಯಿಂದ ಮುರಿದು
ಹೋದ ಬಿಂದಿಗೆಯಂತೆ ನಿಷ್ಪ್ರಯೋಜಕವಾಗು
ವುದು. ನಿನ್ನ ಜೀವನವು, ಬಾವಿಯ ಕಟ್ಟೆಯ ಮೇಲೆ
ಮುಚ್ಚಿದ್ದ ಚಪ್ಪಡಿಕಲ್ಲು ತಾನೇ ಮುರಿದು ಬಾವಿ
ಯೊಳಗೆ ಬಿದ್ದುಹೋದಂತೆ ನಿಷ್ಪ್ರಯೋಜಕ
ವಾಗುವುದು.

7 ನಿನ್ನ ದೇಹ ಭೂಮಿಯಿಂದ ಬಂದಿದೆ. ನೀನು
ಸತ್ತಾಗ ಅದು ಮತ್ತೆ ಭೂಮಿಯ ಪಾಲಾಗುವುದು.
ಆದರೆ ನಿನ್ನ ಆತ್ಮವು ದೇವರಿಂದ ಬಂದಿದೆ. ನಿನ್ನ
ದೇಹವು ಸತ್ತ ಮೇಲೆ, ನಿನ್ನ ಆತ್ಮವು ಮತ್ತೆ ದೇವರ
ಬಳಿಗೆ ಹೋಗುವುದು.

[8]ಪ್ರತಿಯೊಂದು ಉಪಯೋಗವಿಲ್ಲದ್ದು! ಪ್ರಸಂಗಿಯು ಹೇಳುವುದೇನೆಂದರೆ, ವ್ಯರ್ಥವೇ ವ್ಯರ್ಥ, ಸಮಸ್ತವೂ ವ್ಯರ್ಥ.

### ಅಂತಿಮ ನುಡಿಗಳು

[9]ಪ್ರಸಂಗಿಯು ತುಂಬ ಜ್ಞಾನಿಯಾಗಿದ್ದನು.
ಪ್ರಸಂಗಿಯು ಅನೇಕ ಜ್ಞಾನೋಪದೇಶಗಳನ್ನು ತುಂಬ
ಎಚ್ಚರಿಕೆಯಿಂದ ಅಧ್ಯಯನ ಮಾಡಿ ಕ್ರಮಪಡಿಸಿದನು.
[10]ಪ್ರಸಂಗಿಯು ಸರಿಯಾದ ಪದಗಳನ್ನು ಪ್ರಯಾಸದಿಂದ
ಕಂಡುಹಿಡಿದು ಬಳಸಿದನು; ಸತ್ಯವೂ ಭರವಸೆಗೆ
ಯೋಗ್ಯವೂ ಆದ ಉಪದೇಶಗಳನ್ನು ಬರೆದನು.
[11]ಜ್ಞಾನಿಯ ನುಡಿಗಳು ಪ್ರಾಣಿಗಳನ್ನು ಮುನ್ನಡೆಸುವ
ಚಾವಟಿಗಳಂತಿವೆ. ಅವನ ಉಪದೇಶಗಳು ಮುರಿಯದ
ಮೊಳೆಗಳಂತಿವೆ. ಅವುಗಳೆಲ್ಲ ಒಬ್ಬನೇ ಕುರುಬನಿಂದ
(ದೇವರಿಂದ) ಬಂದಿವೆ. [12]ಆದ್ದರಿಂದ ಮಗನೇ, ಆ
ಉಪದೇಶಗಳನ್ನು ಅಧ್ಯಯನ ಮಾಡು, ಆದರೆ ಬೇರೆ
ಪುಸ್ತಕಗಳ ಬಗ್ಗೆ ಎಚ್ಚರಿಕೆಯಿಂದಿರು. ಜನರು ಯಾವಾ
ಗಲೂ ಪುಸ್ತಕಗಳನ್ನು ಬರೆಯುತ್ತಿರುತ್ತಾರೆ; ಅತಿಯಾದ
ಅಧ್ಯಯನವು ನಿನ್ನನ್ನು ತುಂಬ ಆಯಾಸಗೊಳಿಸುತ್ತದೆ.
[13-14]ಈ ಪುಸ್ತಕದಲ್ಲಿ ಬರೆಯಲಾಗಿರುವ ಎಲ್ಲಾ
ವಿಷಯಗಳಿಂದ ನಾವು ಕಲಿತುಕೊಳ್ಳತಕ್ಕದ್ದೇನು?
ಒಬ್ಬನು ಮಾಡಬಹುದಾದ ಅತ್ಯಂತ ಮುಖ್ಯವಾದ
ಕಾರ್ಯವೆಂದರೆ, ದೇವರಲ್ಲಿ ಭಯಭಕ್ತಿಯಿಂದಿದ್ದು
ಆತನ ಆಜ್ಞೆಗಳಿಗೆ ವಿಧೇಯನಾಗಿರುವುದೇ. ಯಾಕೆಂದರೆ
ಜನರ ಎಲ್ಲಾ ಕಾರ್ಯಗಳೂ ರಹಸ್ಯಗಳೂ ದೇವರಿಗೆ
ಗೊತ್ತಿವೆ. ಆತನು ಪ್ರತಿಯೊಂದು ಕಾರ್ಯವನ್ನೂ
ತಿಳಿದಿರುವುದರಿಂದ ಪ್ರತಿಯೊಂದಕ್ಕೂ ನ್ಯಾಯತೀರ್ಪು
ನೀಡುವನು.

# ಪರಮ ಗೀತ

1 ಸೊಲೊಮೋನನ ಮನೋಹರವಾದ ಗೀತೆ.

### ಪ್ರಿಯತಮೆ ಪ್ರಿಯಕರನಿಗೆ

2 ನಿನ್ನ ಬಾಯಿಂದ ನನ್ನನ್ನು ಮುದ್ದಾಡು, ನಿನ್ನ ಪ್ರೀತಿ ದ್ರಾಕ್ಷಾರಸಕ್ಕಿಂತಲೂ ಉತ್ತಮ.
3 ನಿನ್ನ ತೈಲವು ಪರಿಮಳಭರಿತವಾಗಿದೆ; ನಿನ್ನ ಹೆಸರು ಸುಗಂಧದ್ರವ್ಯದಂತಿದೆ. ಆದ್ದರಿಂದ ಯುವತಿಯರು ನಿನ್ನನ್ನು ಪ್ರೀತಿಸುವರು.
4 ನನ್ನನ್ನು ಕರೆದುಕೊಂಡು ಹೋಗು! ನಾವು ಓಡಿ ಹೋಗೋಣ! ರಾಜನು ನನ್ನನ್ನು ಅಂತಃಪುರಕ್ಕೆ ಬರಮಾಡಿದ್ದಾನೆ.

### ಜೆರುಸಲೇಮಿನ ಸ್ತ್ರೀಯರು

ನಿನ್ನಲ್ಲಿ ಹರ್ಷಿಸಿ ಉಲ್ಲಾಸಿಸುವೆವು. ನಿನ್ನ ಪ್ರೀತಿಯು ದ್ರಾಕ್ಷಾರಸಕ್ಕಿಂತಲೂ ಉತ್ತಮ. ಯುವತಿಯರು ನಿನ್ನನ್ನು ಹೃದಯಪೂರ್ವಕವಾಗಿ ಪ್ರೀತಿಸುವರು.

### ಪ್ರಿಯತಮೆ ಜೆರುಸಲೇಮಿನ ಸ್ತ್ರೀಯರಿಗೆ

5 ಜೆರುಸಲೇಮಿನ ಸ್ತ್ರೀಯರೇ, ನಾನು ಕಪ್ಪಾಗಿದ್ದರೂ ಕೇದಾರಿನ ಗುಡಾರಗಳಂತೆಯೂ ಸೊಲೊಮೋನನ ಪರದೆಗಳಂತೆಯೂ ಸುಂದರಳಾಗಿರುವೆ.
6 ಸೂರ್ಯನ ತಾಪಕ್ಕೆ ನಾನೆಷ್ಟು ಕಪ್ಪಾಗಿದ್ದೇನೆಂದು ನೋಡಬೇಡಿರಿ. ನನ್ನ ಸಹೋದರರು ನನ್ನ ಮೇಲೆ ಕೋಪಗೊಂಡು ದ್ರಾಕ್ಷಿತೋಟಗಳನ್ನು ನೋಡಿಕೊಳ್ಳಲು ನನ್ನನ್ನು ನೇಮಿಸಿದರು. ಆದರೆ ನಾನು ನನ್ನ ತೋಟವನ್ನು ಕಾಯಲಿಲ್ಲ.

### ಪ್ರಿಯತಮೆ ಪ್ರಿಯಕರನಿಗೆ

7 ನನ್ನ ಪ್ರಾಣಪ್ರಿಯನೇ, ನಿನ್ನ ಕುರಿಗಳನ್ನು ಎಲ್ಲಿ ಮೇಯಿಸುವೆ? ಮಧ್ಯಾಹ್ನದಲ್ಲಿ ಅವುಗಳನ್ನು ಎಲ್ಲಿ ಮಲಗಿಸುವೆ? ಮುಸುಕುಹಾಕಿಕೊಂಡು ನಿನ್ನ ಸ್ನೇಹಿತರ ಮಂದೆಗಳ ಹತ್ತಿರ ಅಲೆದಾಡುವ ಹುಡುಗಿಯಂತೆ ನಾನೇಕಿರಬೇಕು?

### ಪ್ರಿಯಕರನು ಪ್ರಿಯತಮೆಗೆ

8 ಸ್ತ್ರೀಯರಲ್ಲಿ ಅತ್ಯಂತ ರೂಪವತಿಯೇ, ನಿನ್ನ ಪ್ರಿಯನು ಎಲ್ಲಿದ್ದಾನೆಂಬುದು ನಿನಗೆ ಗೊತ್ತಿಲ್ಲದಿದ್ದರೆ, ಹೋಗು, ಕುರಿಗಳನ್ನು ಹಿಂಬಾಲಿಸು, ಕುರುಬರ ಗುಡಾರಗಳ ಬಳಿಯಲ್ಲಿ ನಿನ್ನ ಮೇಕೆಮರಿಗಳನ್ನು ಮೇಯಿಸು.
9 ನನ್ನ ಪ್ರಿಯೆ, ಫರೋಹನ ರಥಗಳ ಮಧ್ಯದಲ್ಲಿರುವ ಹೆಣ್ಣು ಕುದುರೆಗಿಂತಲೂ ನೀನು ಸುಂದರಳಾಗಿರುವೆ.
10 ನಿನ್ನ ಕೆನ್ನೆಗಳು ಅಲಂಕಾರಗಳಿಂದ ಸುಂದರವಾಗಿವೆ. ನಿನ್ನ ಕಂಠವು ಹಾರಗಳಿಂದ ಅಂದವಾಗಿದೆ.
11 ಬೆಳ್ಳಿಯ ತಿರುಪಿನಿಂದ ಕೂಡಿದ ಚಿನ್ನದ ಆಭರಣಗಳನ್ನು ನಾವು ನಿನಗೋಸ್ಕರ ಮಾಡಿಸುವೆವು.

### ಪ್ರಿಯತಮೆ

12 ಓಲಗದ ಮೇಲೆ ಮಲಗಿರುವ ರಾಜನಿಗೆ ನನ್ನ ಸುಗಂಧದ್ರವ್ಯದ ಪರಿಮಳವು ಹರಡುವುದು.
13 ನನ್ನ ಪ್ರಿಯನು ರಾತ್ರಿಯೆಲ್ಲಾ ನನ್ನ ಸ್ತನಗಳ ನಡುವೆ ಇರುವ ಗೋಲರಸದ ಚೀಲದಂತಿದ್ದಾನೆ.
14 ನನ್ನ ಪ್ರಿಯನು ನನಗೆ ಏಂಗೆದಿಯ ತೋಟಗಳ ಗೋರಂಟಿಯ ಹೂಗೊಂಚಲು.

### ಪ್ರಿಯಕರ

15 ನನ್ನ ಪ್ರಿಯೆ, ನೀನು ರೂಪವತಿ! ನೀನು ಸುಂದರಿ! ನಿನ್ನ ಕಣ್ಣುಗಳು ಪಾರಿವಾಳಗಳಂತೆ ಕೋಮಲ.

### ಪ್ರಿಯತಮೆ

16 ನನ್ನ ಪ್ರಿಯನೇ, ನೀನು ಬಹು ಸುಂದರ! ಹೌದು, ನೀನು ಎಷ್ಟೋ ಮನೋಹರ! ನಮ್ಮ ಹಾಸಿಗೆ ಎಷ್ಟೋ ಉಲ್ಲಾಸಕರ!
17 ನಮ್ಮ ಮನೆಯ ತೊಲೆಗಳು ದೇವದಾರು ಮರದ ತೊಲಗಳು. ನಮ್ಮ ಮನೆಯ ಜಂತೆಗಳು ತುರಾಯಿ ಮರದ ಜಂತೆಗಳು.

2 ನಾನು ಶಾರೋನಿನಲ್ಲಿರು ಗುಲಾಬಿ; ತಗ್ಗು
ಗಳಲ್ಲಿರುವ ತಾವರೆ.

### ಪ್ರಿಯಕರ

2 ನನ್ನ ಪ್ರಿಯೆ, ಮುಳ್ಳುಗಳ ನಡುವೆ ಇರುವ
ತಾವರೆ ಹೂವಿನಂತೆ ನೀನು ಯುವತಿಯರಲ್ಲೆಲ್ಲಾ
ಶ್ರೇಷ್ಠಳು.

### ಪ್ರಿಯತಮೆ

3 ನನ್ನ ಪ್ರಿಯನೇ, ಕಾಡುಮರಗಳ ನಡುವೆ ಇರುವ
ಒಂದು ಸೇಬಿನ ಮರದಂತೆ ನೀನು ಯುವಕ
ರಲ್ಲೆಲ್ಲಾ ಶ್ರೇಷ್ಠನು.

### ಪ್ರಿಯತಮೆ ಸ್ತ್ರೀಯರಿಗೆ

ನಾನು ಅವನ ನೆರಳಲ್ಲಿ ಕುಳಿತುಕೊಂಡು ಸಂತೋಷಿ
ಸಿದೆ; ಅವನ ಫಲ ನನ್ನ ನಾಲಿಗೆಗೆ ಸಿಹಿಯಾಗಿತ್ತು.
4 ನನ್ನ ಪ್ರಿಯಕರನು ನನ್ನನ್ನು ದ್ರಾಕ್ಷಾರಸದ ಮನೆಗೆ
ಕರೆದುಕೊಂಡು ಬಂದನು; ನನ್ನ ಕುರಿತು ಆತನಿಗಿದ್ದ
ಉದ್ದೇಶ ಪ್ರೀತಿಯೇ.
5 ದ್ರಾಕ್ಷಿಯಿಂದ ನನ್ನನ್ನು ಉಪಚರಿಸಿರಿ; ಸೇಬು
ಹಣ್ಣುಗಳಿಂದ ನನ್ನನ್ನು ಆದರಿಸಿರಿ; ನಾನು ಅನು
ರಾಗದಿಂದ ಅಸ್ವಸ್ಥಳಾಗಿರುವೆ.
6 ನನ್ನ ಪ್ರಿಯನ ಎಡಗೈ ತಲೆದಿಂಬಾಗಿ ಅವನ ಬಲಗೈ
ನನ್ನನ್ನು ತಬ್ಬಿಕೊಳ್ಳುವುದು!
7 ಜೆರುಸಲೇಮಿನ ಹೆಣ್ಣುಮಕ್ಕಳೇ, ತಕ್ಕಕಾಲಕ್ಕೆ
ಮೊದಲೇ ಪ್ರೀತಿಯನ್ನು ಹುಟ್ಟಿಸಿ, ಬೆಳಿಯಿಸುವುದಿ
ಲ್ಲವೆಂದು ಜಿಂಕೆಗಳ ಮೇಲೆಯೂ ಕಾಡುಹುಲ್ಲೆಗಳ
ಮೇಲೆಯೂ ನನಗೆ ಪ್ರಮಾಣ ಮಾಡಿರಿ.
8 ಅಗೋ, ನನ್ನ ಪ್ರಿಯನ ಸ್ವರ! ಅವನು ಬೆಟ್ಟಗಳ
ಮೇಲೆ ನೆಗೆಯುತ್ತಾ ಗುಡ್ಡಗಳ ಮೇಲೆ ಕುಪ್ಪಳಿ
ಸುತ್ತಾ ಬರುತ್ತಿದ್ದಾನೆ.
9 ನನ್ನ ಪ್ರಿಯನು ಸಾರಂಗದಂತೆಯೂ ಪ್ರಾಯದ
ಜಿಂಕೆಯಂತೆಯೂ ಇದ್ದಾನೆ. ಅಗೋ, ಅವನು
ನಮ್ಮ ಗೋಡೆಯ ಆಚೆ ನಿಂತಿದ್ದಾನೆ; ತಡಕೆಗಳಿಂದ
ಇಣಿಕಿಹಾಕುತ್ತಿದ್ದಾನೆ; ಕಿಟಕಿಗಳಿಂದ ನೋಡುತ್ತಿ
ದ್ದಾನೆ.
10 ನನ್ನ ಪ್ರಿಯನು ನನಗೆ ಹೀಗಂದನು: ‘‘ನನ್ನ
ಪ್ರಿಯಳೇ, ನನ್ನ ಸುಂದರಿಯೇ, ಎದ್ದೇಳು, ನಾವು
ದೂರ ಹೋಗೋಣ!
11 ಇಗೋ, ಚಳಿಗಾಲ ಕಳೆಯಿತು; ಮಳೆಗಾಲ
ಮುಗಿದುಹೋಯಿತು.
12 ಭೂಮಿಯ ಮೇಲೆ ಹೂವುಗಳು ಕಾಣುತ್ತವೆ;
ಪಕ್ಷಿಗಳು ಹಾಡುವ ಸಮಯವು ಬಂದಿದೆ. ದೇಶ
ದಲ್ಲಿ ಪಾರಿವಾಳದ ಸ್ವರವು ಕೇಳಿಸುತ್ತದೆ.
13 ಅಂಜೂರ ಮರ ಕಾಯಿಗಳನ್ನು ಬಿಡುತ್ತಿದೆ;
ದ್ರಾಕ್ಷಿಬಳ್ಳಿಯ ಹೂವುಗಳಿಂದ ಸುವಾಸನೆಯು
ಬರುತ್ತಿದೆ. ನನ್ನ ಪ್ರಿಯಳೇ, ನನ್ನ ಸುಂದರಿಯೇ,
ಎದ್ದೇಳು, ನಾವು ದೂರ ಹೋಗೋಣ!’’

### ಪ್ರಿಯಕರ

14 ಬಂಡೆಯ ಬಿರುಕುಗಳಲ್ಲಿಯೂ ಜರಿಯ ಮರೆ
ಯಲ್ಲಿಯೂ ಇರುವ ನನ್ನ ಪಾರಿವಾಳವೇ, ನಿನ್ನ
ರೂಪವನ್ನು ತೋರಿಸು; ನಿನ್ನ ಸ್ವರವನ್ನು ಕೇಳಿಸು,
ನಿನ್ನ ಸ್ವರ ಎಷ್ಟೋ ಮಧುರ! ನಿನ್ನ ರೂಪ ಎಷ್ಟೋ
ಅಂದ!
15 ದ್ರಾಕ್ಷಿತೋಟಗಳನ್ನು ಹಾಳುಮಾಡುವ ನರಿ
ಗಳನ್ನೂ ನರಿಮರಿಗಳನ್ನೂ ಹಿಡಿಯಿರಿ! ನಮ್ಮ
ದ್ರಾಕ್ಷಿತೋಟಗಳು ಈಗ ಹೂಬಿಡುತ್ತಿವೆ.

### ಪ್ರಿಯತಮೆ ಸ್ತ್ರೀಯರಿಗೆ

16 –17ನನ್ನ ಪ್ರಿಯನು ನನ್ನವನೇ! ನಾನು ಅವನ
ವಳೇ! ಹಗಲು ತನ್ನ ಕೊನೆ ಉಸಿರೆಳೆಯುವತನಕ,
ನೆರಳು ಓಡಿಹೋಗುವತನಕ ನನ್ನ ಪ್ರಿಯನು ನೆಲ
ದಾವರೆಗಳ ಮಧ್ಯದಲ್ಲಿ ಮೇಯಿಸುವನು. ನನ್ನ
ಪ್ರಿಯನೇ ಹೊರಡು, ಬೆತೇರ್ ಬೆಟ್ಟಗಳ
ಮೇಲೆ ಸಾರಂಗದಂತೆಯೂ ಪ್ರಾಯದ ಜಿಂಕೆ
ಯಂತೆಯೂ ಇರು!

3 ರಾತ್ರಿ ರಾತ್ರಿಯಲ್ಲಿಯೂ ನನ್ನ ಪ್ರಾಣಪ್ರಿಯನಿ
ಗಾಗಿ ಹಾಸಿಗೆಯ ಮೇಲೆ ಹುಡುಕಿದೆನು. ಎಷ್ಟು
ಹುಡುಕಿದರೂ ಅವನು ಸಿಕ್ಕಲಿಲ್ಲ.
2 ಈಗ ನಾನು ಎದ್ದು ನಗರದಲ್ಲೆಲ್ಲಾ ಸುತ್ತಾಡುವೆನು.
ನನ್ನ ಪ್ರಿಯನಿಗಾಗಿ ಬೀದಿಗಳಲ್ಲಿಯೂ ಚೌಕಗಳ
ಲ್ಲಿಯೂ ಹುಡುಕುವೆನು. ನಾನು ಅವನಿಗಾಗಿ
ಹುಡುಕಿದೆ. ಆದರೆ ಅವನು ಸಿಕ್ಕಲಿಲ್ಲ.
3 ನಗರದಲ್ಲಿ ಗಸ್ತುತಿರುಗುವ ಕಾವಲುಗಾರರನ್ನು
ಕಂಡು, ‘‘ನನ್ನ ಪ್ರಿಯನನ್ನು ನೋಡಿದಿರಾ?’’
ಎಂದು ಕೇಳಿದೆನು.
4 ಅಲ್ಲಿಂದ ಸ್ವಲ್ಪದೂರ ಹೋದಾಗ, ನನ್ನ ಪ್ರಿಯನನ್ನು
ಕಂಡು ಅಪ್ಪಿಕೊಂಡೆ. ನನ್ನ ತಾಯಿಯ ಮನೆಗೆ
ಅಂದರೆ ನನ್ನನ್ನು ಹೆತ್ತವಳ ಕೋಣೆಗೆ ಸೇರುವ ತನಕ
ಅವನನ್ನು ಬಿಡದೆ ಹಿಡಿದುಕೊಂಡೇ ಹೋದೆನು.
5 ಜೆರುಸಲೇಮಿನ ಸ್ತ್ರೀಯರೇ, ತಕ್ಕ ಕಾಲಕ್ಕೆ
ಮೊದಲೇ ಪ್ರೀತಿಯನ್ನು ಹುಟ್ಟಿಸಿ ಬೆಳೆಸುವುದಿಲ್ಲ

ವೆಂದು ಜಿಂಕೆಗಳ ಮೇಲೆಯೂ ಕಾಡುಹುಲ್ಲೆಗಳ
ಮೇಲೆಯೂ ನನಗೆ ಪ್ರಮಾಣಮಾಡಿರಿ.
6 ಮಹಾ ಜನಸಮೂಹದೊಡನೆ ಅಡವಿಯಿಂದ
ಬರುತ್ತಿರುವ ಈ ಸ್ತ್ರೀ ಯಾರು? ಗೋಲರಸ,
ಧೂಪ, ವರ್ತಕರ ಸಕಲ ಸುಗಂಧದ್ರವ್ಯಗಳನ್ನು
ಸುಡುವಾಗ ಮೇಲೇರುವ ಹೊಗೆಯಂತೆ ಧೂಳು
ಮೇಲೇರುತ್ತಿದೆ.
7 ನೋಡಿ, ಅದು ಸೊಲೋಮೋನನ ಪಲ್ಲಕ್ಕಿ. ಅದರ
ಸುತ್ತಲೂ ಅರವತ್ತು ಮಂದಿ ಸೈನಿಕರಿದ್ದಾರೆ. ಅವರು
ಇಸ್ರೇಲಿನ ಸೈನಿಕರು!
8 ಯುದ್ಧವೀರರಾದ ಅವರು ಕೈಯಲ್ಲಿ ಕತ್ತಿ ಹಿಡಿದಿ
ದ್ದಾರೆ; ರಾತ್ರಿಯ ಅಪಾಯದ ನಿಮಿತ್ತ ಅವರು
ಸೊಂಟಕ್ಕೆ ಕತ್ತಿ ಕಟ್ಟಿಕೊಂಡಿದ್ದಾರೆ.
9 ರಾಜನಾದ ಸೊಲೊಮೋನನು ತನಗೋಸ್ಕರ
ಪಲ್ಲಕ್ಕಿಯನ್ನು ಲೆಬನೋನಿನ ದೇವದಾರು ಮರ
ದಿಂದ ಮಾಡಿಸಿದ್ದಾನೆ.
10 ಅದರ ಕಂಬಗಳನ್ನು ಬೆಳ್ಳಿಯಿಂದಲೂ ಅದರ
ಅಡ್ಡಕಂಬಗಳನ್ನು ಚಿನ್ನದಿಂದಲೂ ಮಾಡಲಾಗಿದೆ.
ಅದರ ಆಸನವನ್ನು ನೇರಳೆ ಬಣ್ಣದ ಬಟ್ಟೆಯಿಂದ
ಹೊದಿಸಲಾಗಿದೆ. ಆ ಬಟ್ಟೆಯನ್ನು ಜೆರುಸಲೇಮಿನ
ಸ್ತ್ರೀಯರು ಕಸೂತಿ ಕೆಲಸದಿಂದ ಅಲಂಕರಿಸಿದ್ದಾರೆ.
11 ಚೀಯೋನಿನ ಸ್ತ್ರೀಯರೇ, ಹೊರಗೆ ಹೋಗಿ,
ರಾಜನಾದ ಸೊಲೊಮೋನನನ್ನು ನೋಡಿರಿ.
ಅವನ ಮದುವೆಯ ದಿನದಲ್ಲಿ ಹೃದಯವು ಹರ್ಷ
ಗೊಂಡಿದ್ದಾಗ ಅವನ ತಾಯಿ ತಲೆಗಿಟ್ಟ ಕಿರೀಟ
ವನ್ನು ಧರಿಸಿಕೊಂಡಿದ್ದಾನೆ.

### ಪ್ರಿಯಕರ

4 ನನ್ನ ಪ್ರಿಯಳೇ, ನೀನು ಬಹಳ ಸುಂದರಿ! ನೀನು
ರೂಪವತಿ! ಮುಸುಕಿನೊಳಗಿರುವ ನಿನ್ನ ಕಣ್ಣು
ಗಳು ಕೋಮಲವಾದ ಪಾರಿವಾಳಗಳಂತಿವೆ. ನಿನ್ನ
ಕೂದಲು ಗಿಲ್ಯಾದ್ ಬೆಟ್ಟದ ಇಳಿಜಾರುಗಳಲ್ಲಿ ನೃತ್ಯ
ವಾಡುತ್ತಿರುವ ಆಡುಮಂದೆಯಂತೆ ಬಳುಕುತ್ತಿದೆ.
2 ನಿನ್ನ ಹಲ್ಲುಗಳು ಉಣ್ಣೆ ಕತ್ತರಿಸಿದ ನಂತರ ಸ್ನಾನ
ಮಾಡಿಕೊಂಡು ತಮ್ಮ ಜೋಡಿಗಳನ್ನು ಕಳೆದು
ಕೊಳ್ಳದೆ ಜೊತೆ ಜೊತೆಯಾಗಿ ಬರುವ ಕುರಿಮಂದೆ
ಯಂತಿವೆ.
3 ನಿನ್ನ ತುಟಿಗಳು ರೇಷ್ಮೆಯ ಕೆಂಪುದಾರದಂತಿದೆ. ನಿನ್ನ
ಬಾಯಿ ಸುಂದರವಾಗಿದೆ. ಮುಸುಕಿನೊಳಗಿರುವ
ನಿನ್ನ ಕೆನ್ನೆಗಳು ದಾಳಿಂಬೆ ಹಣ್ಣಿನ ಎರಡು
ಹೋಳುಗಳಂತಿವೆ.
4 ನಿನ್ನ ಕೊರಳು ದಾವೀದನ ಗೋಪುರದಂತೆ
ಉದ್ದವಾಗಿದೆ ಮತ್ತು ತೆಳುವಾಗಿದೆ. ಆ ಗೋಪುರದ
ಗೋಡೆಗಳು ಸಾವಿರ ಗುರಾಣಿಗಳಿಂದಲೂ ಬಲಿಷ್ಠ
ಸೈನಿಕರ ಗುರಾಣಿಗಳಿಂದಲೂ ಅಲಂಕೃತವಾಗಿವೆ.*
5 ನಿನ್ನ ಎರಡು ಸ್ತನಗಳು ಅವಳಿಜವಳಿ ಜಿಂಕೆಮರಿ
ಗಳಂತೆಯೂ ನೆಲದಾವರೆಗಳ ಮಧ್ಯದಲ್ಲಿ
ಮೇಯುತ್ತಿರುವ ಅವಳಿಜವಳಿ ಸಾರಂಗಗ
ಳಂತೆಯೂ ಇವೆ.
6 ಹಗಲು ತನ್ನ ಕೊನೆ ಉಸಿರೆಳೆಯುವವರೆಗೆ ಮತ್ತು
ನೆರಳುಗಳೆಲ್ಲಾ ಓಡಿಹೋಗುವವರೆಗೆ ನಾನು
ಗೋಲರಸದ ಬೆಟ್ಟಕ್ಕೂ ಧೂಪದ ಗುಡ್ಡಕ್ಕೂ
ಹೋಗುವೆನು.
7 ನನ್ನ ಪ್ರಿಯೆ, ನೀನು ಸರ್ವಾಂಗ ಸುಂದರಿ. ನಿನಗೆ
ಎಲ್ಲಿಯೂ ಕಲೆಗಳಿಲ್ಲ!
8 ನನ್ನ ವಧುವೇ, ಲೆಬನೋನಿನಿಂದ ನನ್ನೊಂದಿಗೆ
ಬಾ! ಲೆಬನೋನಿನಿಂದ ನನ್ನೊಂದಿಗೆ ಬಾ! ಅಮಾ
ನದ ತುದಿಯಿಂದಲೂ ಶೆನೀರಿನ ತುದಿಯಿಂದಲೂ
ಹೆರ್ಮೋನಿನ ತುದಿಯಿಂದಲೂ ಸಿಂಹದ ಗವಿ
ಗಳಿಂದಲೂ ಚಿರತೆಗಳ ಬೆಟ್ಟದಿಂದ ಬಾ!
9 ನನ್ನ ಪ್ರಿಯಳೇ, ನನ್ನ ವಧುವೇ, ನೀನು ನನ್ನ
ಹೃದಯವನ್ನು ಅಪಹರಿಸಿರುವೆ. ನಿನ್ನ ನೋಟ
ದಿಂದಲೂ ನಿನ್ನ ಮುತ್ತಿನಹಾರದಿಂದಲೂ ನನ್ನ
ಹೃದಯವನ್ನು ವಶಪಡಿಸಿಕೊಂಡೆ.
10 ನನ್ನ ಪ್ರಿಯಳೇ, ನನ್ನ ವಧುವೇ, ನಿನ್ನ ಪ್ರೀತಿಯು
ಎಷ್ಟೋ ರಮ್ಯ! ನಿನ್ನ ಪ್ರೀತಿಯು ದ್ರಾಕ್ಷಾರಸ
ಕ್ಕಿಂತಲೂ ಎಷ್ಟೋ ಉತ್ತಮ! ನಿನ್ನ ತೈಲದ
ಪರಿಮಳವು ಸಕಲ ಬಗೆಯ ಸುಗಂಧ ದ್ರವ್ಯಗಳಿ
ಗಿಂತಲೂ ಉತ್ತಮ!
11 ನನ್ನ ವಧುವೇ, ನಿನ್ನ ತುಟಿಗಳು ಜೇನುಗರೆ
ಯುತ್ತವೆ; ಜೇನೂ ಹಾಲೂ ನಿನ್ನ ನಾಲಿಗೆಯ
ಕೆಳಗಿವೆ. ನಿನ್ನ ಬಟ್ಟೆಗಳು ಪರಿಮಳ ದ್ರವ್ಯದಂತೆ*
ಸುವಾಸನೆಭರಿತವಾಗಿವೆ.
12 ನನ್ನ ಪ್ರಿಯಳೇ, ನನ್ನ ವಧುವೇ, ನೀನು ಕದ ಹಾಕಿದ
ತೋಟದಂತಿರುವೆ; ಬೇಲಿಯೊಳಗಿರುವ ಬುಗ್ಗೆ
ಯಂತಿರುವೆ; ಮುಚ್ಚಿಮುದ್ರಿಸಿದ ಚಿಲುಮೆ
ಯಂತಿರುವೆ.

---

**ನಿನ್ನ ಕೊರಳು … ಅಲಂಕೃತವಾಗಿವೆ** ಅಥವಾ ''ನಿನ್ನ ಕೊರಳು ಕಲ್ಲುಗಳ ಸಾಲುಗಳಿಂದ ಕಟ್ಟಲ್ಪಟ್ಟಿರುವ ದಾವೀದನ ಗೋಪುರದಂತಿದೆ.'' ಇದರರ್ಥವೇನಂದರೆ, ಆಕೆ ಅನೇಕ ಕಂಠಹಾರಗಳನ್ನು ಒಂದರ ಮೇಲೊಂದು ಧರಿಸಿಕೊಂಡಿದ್ದರಿಂದ ಅವು ಗೋಪುರದ ಕಲ್ಲಿನ ಸಾಲುಗಳಂತೆ ಕಾಣಿಸಿತು.

**ಪರಿಮಳ ದ್ರವ್ಯ** ಅಥವಾ, ''ಲೆಬನೋನ್.''

13–14 ನಿನ್ನ ಅಂಗಾಂಗಳು ದಾಳಿಂಬೆ ಮರಗಳಿಂದಲೂ ರುಚಿಕರವಾದ ಹಣ್ಣಿನ ಮರಗಳಿಂದಲೂ ಗೋರಂಟಿ,* ನಾರ್ಡ್,* ಸ್ಯಾಫ್ರನ್,* ಕ್ಯಾಲಮಸ್,* ಮತ್ತು ದಾಲ್ಚಿನ್ನಿ ಎಂಬ ಸುಗಂಧದ ಮರಗಳಿಂದಲೂ ಕೂಡಿರುವ ತೋಟದಂತಿವೆ.
15 ನೀನು ತೋಟದ ಬುಗ್ಗೆಯಂತಿರುವೆ; ಹೊಸ ನೀರಿನ ಬಾವಿಯಂತಿರುವೆ; ಲೆಬನೋನಿನ ಬೆಟ್ಟಗಳಿಂದ ಹರಿದುಬರುತ್ತಿರುವ ನೀರಿನಂತಿರುವೆ.

### ಪ್ರಿಯತಮೆ

16 ಉತ್ತರದ ಗಾಳಿಯೇ, ಎಚ್ಚರವಾಗು! ದಕ್ಷಿಣದ ಗಾಳಿಯೇ, ಬಾ! ನನ್ನ ತೋಟದ ಮೇಲೆ ಬೀಸು. ಅದರ ಸುವಾಸನೆಯು ಹರಡಿಕೊಳ್ಳಲಿ. ನನ್ನ ಪ್ರಿಯನು ನನ್ನ ತೋಟವನ್ನು ಪ್ರವೇಶಿಸಲಿ. ಅವನು ಅದರ ರುಚಿಕರವಾದ ಹಣ್ಣನ್ನು ತಿನ್ನಲಿ.

### ಪ್ರಿಯಕರ

5 ನನ್ನ ಪ್ರಿಯೇ, ನನ್ನ ವಧುವೇ, ನನ್ನ ತೋಟವನ್ನು ಪ್ರವೇಶಿಸಿದ್ದೇನೆ. ನನ್ನ ಸುಂಗಧ ದ್ರವ್ಯದೊಡನೆ ಗೋಲರಸವನ್ನು ಶೇಖರಿಸಿದ್ದೇನೆ. ನನ್ನ ಜೇನುಗೂಡನ್ನೂ ಜೇನನ್ನೂ ತಿಂದಿದ್ದೇನೆ. ನನ್ನ ದ್ರಾಕ್ಷಾರಸವನ್ನೂ ಹಾಲನ್ನೂ ಕುಡಿದಿದ್ದೇನೆ.

### ಪ್ರಿಯತಮೆಯು ಸ್ನೇಹಿತರಿಗೆ

ಸ್ನೇಹಿತರೇ, ತಿನ್ನಿರಿ, ಕುಡಿಯಿರಿ! ಪ್ರೀತಿಯಿಂದ ಮತ್ತರಾಗಿ!

### ಪ್ರಿಯತಮೆ

2 ನಾನು ನಿದ್ರೆಮಾಡುತ್ತಿರುವಾಗಲೂ ಹೃದಯ ಎಚ್ಚರವಾಗಿರುವುದು. ನನ್ನ ಪ್ರಿಯನು ಬಾಗಿಲು ತಟ್ಟುತ್ತಿರುವುದು ನನಗೆ ಕೇಳುತ್ತಿದೆ. ‘‘ನನ್ನ ಪ್ರಿಯಳೇ, ನನ್ನ ಕಾಂತಳೇ, ನನ್ನ ಪಾರಿವಾಳವೇ, ನನ್ನ ನಿರ್ಮಲೆಯೇ, ಬಾಗಿಲು ತೆರೆ! ನನ್ನ ತಲೆಯು ಇಬ್ಬನಿಯಿಂದ ತೇವವಾಗಿದೆ; ನನ್ನ ಕೂದಲು ರಾತ್ರಿ ಬೀಳುವ ಹನಿಗಳಿಂದ ತೇವವಾಗಿದೆ.’’
3 ‘‘ನಾನು ನನ್ನ ಮೇಲಂಗಿಯನ್ನು ತೆಗೆದಿದ್ದೇನೆ; ಅದನ್ನು ಮತ್ತೆ ಹಾಕಿಕೊಳ್ಳಲು ನನಗೆ ಇಷ್ಟವಿಲ್ಲ. ನಾನು ನನ್ನ ಪಾದಗಳನ್ನು ತೊಳೆದಿದ್ದೇನೆ. ಅವುಗಳನ್ನು ಮತ್ತೆ ಕೊಳೆ ಮಾಡಲು ನನಗೆ ಇಷ್ಟವಿಲ್ಲ.’’
4 ನನ್ನ ಪ್ರಿಯನು ಬಾಗಿಲ ಚಿಲಕದ ರಂಧ್ರದಲ್ಲಿ ಕೈ ನೀಡಿದಾಗ ಅವನ ಮೇಲೆ ನನಗೆ ಮರುಕ ವಾಯಿತು.
5 ನನ್ನ ಪ್ರಿಯನಿಗೆ ಬಾಗಿಲು ತೆರೆಯಲು ನಾನು ಎದ್ದಾಗ ಅಗುಳಿಯ ಹಿಡಿಗಳ ಮೇಲೆ ನನ್ನ ಕೈಗಳಿಂದ ಗೋಲರಸವೂ ನನ್ನ ಬೆರಳುಗಳಿಂದ ಸುವಾಸನೆಯ ಗೋಲರಸವೂ ತೊಟ್ಟಿಕ್ಕಿದವು.
6 ನಾನು ನನ್ನ ಪ್ರಿಯನಿಗಾಗಿ ಕದತೆರೆಯುವಷ್ಟರಲ್ಲಿ ನನ್ನ ಪ್ರಿಯನು ಹೊರಟುಹೋಗಿದ್ದನು! ಅವನು ಇಲ್ಲದಿರುವುದನ್ನು ಕಂಡು ನನ್ನ ಹೃದಯವು ಕುಸಿದುಹೋಯಿತು. ನಾನು ಅವನಿಗಾಗಿ ಹುಡುಕಿದರೂ ಅವನು ಸಿಕ್ಕಲಿಲ್ಲ. ನಾನು ಅವನಿಗಾಗಿ ಕೂಗಿದರೂ ಅವನು ಉತ್ತರಿಸಲಿಲ್ಲ.
7 ನಗರದಲ್ಲಿ ಗಸುತ್ತಿರುಗುವ ಕಾವಲುಗಾರರು ನನ್ನನ್ನು ಕಂಡು ಹೊಡೆದು ಗಾಯಮಾಡಿದರು. ಕೋಟೆಯ ಕಾವಲುಗಾರರು ನನ್ನ ಮೇಲ್ಹೊದಿಕೆಯನ್ನು ತೆಗೆದುಕೊಂಡರು.
8 ಜೆರುಸಲೇಮಿನ ಸ್ತ್ರೀಯರೇ, ನೀವು ನನ್ನ ಪ್ರಿಯನನ್ನು ಕಂಡರೆ, ನಾನು ಅನುರಾಗದಿಂದ ಅಸ್ವಸ್ಥಳಾಗಿದ್ದೇನೆಂದು ತಿಳಿಸಿರಿ.

### ಜೆರುಸಲೇಮಿನ ಸ್ತ್ರೀಯರು ಪ್ರಿಯತಮೆಗೆ

9 ಸ್ತ್ರೀಯರಲ್ಲಿ ಅತ್ಯಂತ ಸೌಂದರ್ಯವತಿಯೇ, ನಿನ್ನ ಪ್ರಿಯನ ಅತಿಶಯವೇನು? ನೀನು ಹೀಗೆ ನಮ್ಮಿಂದ ಪ್ರಮಾಣಮಾಡಿಸಲು ನಿನ್ನ ಪ್ರಿಯನ ಅತಿಶಯವೇನು?

### ಪ್ರಿಯತಮೆಯು ಜೆರುಸಲೇಮಿನ ಸ್ತ್ರೀಯರಿಗೆ

10 ನನ್ನ ಪ್ರಿಯನದು ಹೊಳಪಾದ ಕಂದುಬಣ್ಣ. ಹತ್ತು ಸಾವಿರ ಪುರುಷರಲ್ಲಿ ಅವನೇ ಆಕರ್ಷಕ ಪುರುಷ.
11 ಅವನ ತಲೆಯು ಚೊಕ್ಕ ಬಂಗಾರದಂತಿದೆ; ಅವನ ಗುಂಗುರು ಕೂದಲು ಕಾಗೆಯಷ್ಟೇ ಕಪ್ಪಾಗಿದೆ.
12 ಅವನ ಕಣ್ಣುಗಳು ಹಾಲಿನಲ್ಲಿ ಸ್ನಾನಮಾಡಿದ ಪಾರಿವಾಳಗಳಂತೆಯೂ ಆಭರಣದಲ್ಲಿ ಜೋಡಿಸಿರುವ ಮುತ್ತಿನಂತೆಯೂ ಇವೆ.
13 ಅವನ ಕೆನ್ನೆಗಳ ಸುಗಂಧ ಸಸ್ಯಗಳ ದಿಬ್ಬದಂತೆಯೂ ಸುವಾಸನೆಯುಳ್ಳ ಹೂವುಗಳಂತೆಯೂ ಇವೆ.

---

**ಗೋರಂಟಿ** ಪರಿಮಳಭರಿತವಾದ ಸಸಿ. ಇದರಲ್ಲಿ ನೀಲಿ ಮತ್ತು ಹಳದಿ ಮಿಶ್ರಿತವಾದ ಹೂವುಗಳು ಗುಂಪುಗುಂಪಾಗಿ ಬೆಳೆಯುತ್ತವೆ.

**ನಾರ್ಡ್** ನಾರ್ಡ್ ಸಸಿಯ ಬೇರಿನ ಎಣ್ಣೆಯು ಅತ್ಯಂತ ಬೆಲೆಬಾಳುತ್ತದೆ. ಇದನ್ನು ಪರಿಮಳ ದ್ರವ್ಯದಂತೆ ಉಪಯೋಗಿಸುತ್ತಿದ್ದರು.

**ಸಾಫ್ರನ್** ಒಂದು ಬಗೆಯ ಹಳದಿ ಹೂವು. ಪರಿಮಳಕ್ಕಾಗಿ ಇದನ್ನು ಉಪಯೋಗಿಸುತ್ತಿದ್ದರು.

**ಕ್ಯಾಲಮಸ್** ಒಂದು ಬಗೆಯ ಜೊಂಡು ಸಸ್ಯ. ಇದನ್ನು ಪರಿಮಳದ್ರವ್ಯಕ್ಕಾಗಿ ಉಪಯೋಗಿಸುತ್ತಿದ್ದರು.

ಅವನ ತುಟಿಗಳು ಕೆಂದಾವರೆಗಳಂತಿವೆ; ಅವನ
ತುಟಿಗಳಲ್ಲಿ ಗೋಲರಸವು ತೊಟ್ಟಿಕ್ಕುತ್ತದೆ.
14 ಅವನ ಕೈಗಳು ರತ್ನದಿಂದ ಕೂಡಿದ ಬಂಗಾರದ
ಸಲಾಕೆಯಂತಿವೆ; ಅವನ ದೇಹವು ನೀಲಿಬಣ್ಣದ
ಕಲ್ಲುಗಳಿಂದ ಕೂಡಿದ ನಯವಾದ ದಂತದಂತಿದೆ.
15 ಅವನ ಕಾಲುಗಳು ಬಂಗಾರದ ಪಾದಗಳುಳ್ಳ
ಅಮೃತಶಿಲೆಯ ಕಂಬಗಳಂತಿವೆ. ಅವನು ಲೆಬ
ನೋನಿನ ದೇವದಾರು ವೃಕ್ಷದಂತೆ ಎತ್ತರ
ವಾಗಿದ್ದಾನೆ.
16 ಹೌದು, ಜೆರುಸಲೇಮಿನ ಸ್ತ್ರೀಯರೇ, ನನ್ನ
ಪ್ರಿಯನು ಅತ್ಯಂತ ಮನೋಹರನು; ಅವನ ನುಡಿ
ಬಹು ಇಂಪು. ಅವನೇ ನನ್ನ ಪ್ರಿಯನು; ಅವನೇ
ನನ್ನ ಕಾಂತನು.

### ಜೆರುಸಲೇಮಿನ ಸ್ತ್ರೀಯರು ಪ್ರಿಯತಮೆಗೆ

6 ನಿನ್ನ ಪ್ರಿಯನು ಎಲ್ಲಿಗೆ ಹೋದನು? ನೀನು
ಸ್ತ್ರೀಯರಲ್ಲಿ ಅತ್ಯಂತ ಸೌಂದರ್ಯವತಿ. ನಿನ್ನ
ಪ್ರಿಯನು ಯಾವ ಕಡೆಗೆ ಹೋದನು? ನೀನು
ಹೇಳಿದರೆ, ನಾವು ನಿನಗೋಸ್ಕರ ಅವನನ್ನು
ಹುಡುಕುವೆವು.

### ಪ್ರಿಯತಮೆಯು ಜೆರುಸಲೇಮಿನ ಸ್ತ್ರೀಯರಿಗೆ

2 ನನ್ನ ಪ್ರಿಯನು ತನ್ನ ತೋಟದಲ್ಲಿರುವ ಸುಗಂಧ
ಸಸ್ಯಗಳ ದಿಬ್ಬಗಳಿಗೆ ಹೋಗಿದ್ದಾನೆ; ತೋಟಗಳಲ್ಲಿ
ಮಂದೆಯನ್ನು ಮೇಯಿಸುವುದಕ್ಕೂ ನೆಲದಾವರೆ
ಗಳನ್ನು ಕೊಯ್ಯುವುದಕ್ಕೂ ಹೋಗಿದ್ದಾನೆ.
3 ನನ್ನ ಪ್ರಿಯನು ನನ್ನವನೇ; ನಾನು ಅವನವಳೇ.
ಅವನು ನೆಲದಾವರೆಗಳ ಮಧ್ಯದಲ್ಲಿ ಮಂದೆಯನ್ನು
ಮೇಯಿಸುವನು.

### ಪ್ರಿಯಕರನು ಪ್ರಿಯತಮಗೆ

4 ನನ್ನ ಪ್ರಿಯಳೇ, ನೀನು ತಿರ್ಚ ಪಟ್ಟಣದಂತೆ
ಸುಂದರಿ. ನೀನು ಜೆರುಸಲೇಮಿನಂತೆ ರೂಪವತಿ;
ಜಯಧ್ವಜವೆತ್ತಿರುವ ಸೈನ್ಯದಂತೆ ಪ್ರಭಾವವುಳ್ಳವಳು.
5 ನಿನ್ನ ಕಣ್ಣುಗಳನ್ನು ನನ್ನ ಕಡೆಯಿಂದ ತಿರುಗಿಸು;
ಅವು ನನ್ನನ್ನು ಉದ್ರೇಕಗೊಳಿಸುತ್ತವೆ. ನಿನ್ನ
ಕೂದಲು ಗಿಲ್ಯಾದ್ ಬೆಟ್ಟದ ಇಳಿಜಾರುಗಳಲ್ಲಿ
ನೃತ್ಯವಾಡುತ್ತಿರುವ ಆಡು ಮಂದೆಯಂತೆ ಬಳಕು
ತ್ತಿದೆ.
6 ನಿನ್ನ ಹಲ್ಲುಗಳು ಉಣ್ಣೆ ಕತ್ತರಿಸಿದ ನಂತರ ಸ್ನಾನ
ಮಾಡಿಕೊಂಡು ತಮ್ಮ ಜೋಡಿಗಳನ್ನು ಕಳೆದು
ಕೊಳ್ಳದೆ ಜೊತೆ ಜೊತೆಯಾಗಿ ಬರುವ ಕುರಿ
ಮಂದೆಯಂತಿವೆ.
7 ಮುಸುಕಿನೊಳಗಿರುವ ನಿನ್ನ ಕೆನ್ನೆಗಳು ದಾಳಿಂಬೆ
ಹಣ್ಣಿನ ಎರಡು ಹೋಳುಗಳಂತಿವೆ.
8 ಅರವತ್ತು ಮಂದಿ ರಾಣಿಯರೂ ಎಂಬತ್ತು ಮಂದಿ
ಸೇವಕಿಯರೂ ಲೆಕ್ಕವಿಲ್ಲದಷ್ಟು ಯುವತಿಯರೂ
ನನಗಿದ್ದಾರೆ.
9 ಆದರೆ ನನ್ನ ಪಾರಿವಾಳವೂ ನಿರ್ಮಲೆಯೂ
ಒಬ್ಬಳೇ ಒಬ್ಬಳು. ಆಕೆಯು ತನ್ನ ತಾಯಿಗೆ
ಅಚ್ಚುಮೆಚ್ಚಿನವಳು. ಯುವತಿಯರು ಆಕೆಯನ್ನು
ಕಂಡು ಹೊಗಳುವರು. ಹೌದು, ರಾಣಿಯರೂ
ಸೇವಕಿಯರೂ ಆಕೆಯನ್ನು ಹೊಗಳುವರು.

### ಪ್ರಿಯತಮೆಗೆ ಸ್ತ್ರೀಯರ ಪ್ರಶಂಸೆ

10 ಸೂರ್ಯೋದಯದಂತೆ ಪ್ರಕಾಶಿಸುತ್ತಿರುವ ಈ
ಯುವತಿ ಯಾರು? ಚಂದ್ರನಂತೆ ಸೌಮ್ಯಳೂ
ಸೂರ್ಯನಂತೆ ಶುಭ್ರಳೂ ಜಯಧ್ವಜವೆತ್ತಿರುವ
ಸೈನ್ಯದಂತೆ ಪ್ರಭಾವವುಳ್ಳವಳೂ ಆಗಿರುವೆ.

### ಪ್ರಿಯತಮೆ

11 ಕಣಿವೆಯ ಸಸ್ಯಗಳು ಹಣ್ಣುಬಿಟ್ಟಿವೆಯೋ ದ್ರಾಕ್ಷಾ
ಬಳ್ಳಿಗಳು ಚಿಗುರಿದೆಯೋ ದಾಳಿಂಬರಗಳು ಹೂ
ಬಿಟ್ಟಿವೆಯೋ ಎಂದು ನೋಡಲು ಬಾದಾಮಿ
ಮರಗಳ ತೋಟಕ್ಕೆ ಹೋದೆನು.
12 ನಾನು ಅದನ್ನು ಗ್ರಹಿಸಿಕೊಳ್ಳುವುದಕ್ಕಿಂತ
ಮೊದಲೇ, ನನ್ನ ದೇಶದ ಪ್ರಧಾನರ ರಥಗಳಲ್ಲಿ
ಕುಳಿತುಕೊಂಡಿದ್ದೆನು.

### ಜೆರುಸಲೇಮಿನ ಸ್ತ್ರೀಯರು ಪ್ರಿಯತಮೆಗೆ

13 ಶುಲಾಮಿತಳೇ, ಹಿಂತಿರುಗಿ ಬಾ, ಹಿಂತಿರುಗಿ ಬಾ,
ಹಿಂತಿರುಗಿ ಬಾ, ಹಿಂತಿರುಗಿ ಬಾ, ನಾವು ನಿನ್ನನ್ನು
ನೋಡಬೇಕು! ಮಹನಯಿಮ್ ನೃತ್ಯವನ್ನು*
ನೋಡುವಂತೆ ಶುಲಾಮಿತಳನ್ನೇಕೆ ನೀವು ದೃಷ್ಟಿಸಿ
ನೋಡುತ್ತಿರುವಿರಿ?

### ಪ್ರಿಯಕರನ ಪ್ರಶಂಸೆ

7 ರಾಜಕುಮಾರಿಯೇ, ಪಾದರಕ್ಷೆಗಳಲ್ಲಿರುವ ನಿನ್ನ
ಪಾದಗಳು ಎಷ್ಟೋ ಸುಂದರವಾಗಿವೆ. ನಿನ್ನ
ದುಂಡಾದ ತೊಡೆಗಳು ಶಿಲ್ಪಿಯು ಮಾಡಿದ
ಆಭರಣಗಳಂತಿವೆ.
2 ನಿನ್ನ ಹೊಕ್ಕಳು ದ್ರಾಕ್ಷಾರಸದಿಂದ ತುಂಬಿರುವ

---

**ಮಹನಹಿಮ್ ನೃತ್ಯ** ಅಥವಾ ''ಜಯದ ನೃತ್ಯ.''

ಗುಂಡು ಬಟ್ಟಲಿನಂತಿದೆ;* ನಿನ್ನ ಉದರವು ನೆಲ ದಾವರೆಗಳಿಂದ ಅಲಂಕರಿಸಲ್ಪಟ್ಟಿರುವ ಗೋದಿಯ ರಾಶಿಯಂತಿದೆ.
3 ನಿನ್ನ ಸ್ತನಗಳು ಪ್ರಾಯದ ಸಾರಂಗದ ಎರಡು ಅವಳಿ ಮರಿಗಳಂತಿವೆ.
4 ನಿನ್ನ ಕೊರಳು ದಂತಗೋಪುರದಂತಿದೆ. ನಿನ್ನ ಕಣ್ಣು ಗಳು ಬತ್‌ರಬ್ಬೀಮ್‌ನ ಬಾಗಿಲ ಬಳಿಯಲ್ಲಿರುವ ಹೆಷ್ಬೋನಿನ ಸರೋವರಗಳಂತಿವೆ. ನಿನ್ನ ಮೂಗು ದಮಸ್ಕದ ಕಡೆಗಿರುವ ಲೆಬನೋನಿನ ಗೋಪುರ ದಂತಿದೆ.
5 ನಿನ್ನ ತಲೆಯು ಕರ್ಮೆಲ್ ಬೆಟ್ಟದಂತಿದೆ. ನಿನ್ನ ತಲೆಕೂದಲು ರೇಷ್ಮೆಯಂತಿದೆ. ನಿನ್ನ ಉದ್ದವಾದ, ಸುಂದರವಾದ ಕೂದಲು ರಾಜನನ್ನು ಸಹ ಆಕರ್ಷಿ ಸುತ್ತದೆ!
6 ಪ್ರಿಯಳೇ, ನೀನೆಷ್ಟೋ ಸೌಂದರ್ಯವತಿ. ನಿನ್ನ ರೂಪ ಮನೋಹರ; ನಿನ್ನ ಪ್ರೇಮವು ಆನಂದ ಪೂರ್ಣವಾಗಿದೆ.
7 ನೀನು ಖರ್ಜೂರದ ಮರದಂತೆ ಎತ್ತರವಾಗಿರುವೆ. ನಿನ್ನ ಸ್ತನಗಳು ಖರ್ಜೂರ ಮರದ ಹಣ್ಣಿನ ಗೊಂಚಲುಗಳಂತಿವೆ.
8 ನಾನು ಖರ್ಜೂರದ ಮರವನ್ನು ಹತ್ತುವೆನು. ನಾನು ಅದರ ಕೊಂಬೆಗಳನ್ನು ಹಿಡಿದುಕೊಳ್ಳುವೆನು. ನಿನ್ನ ಸ್ತನಗಳು ದ್ರಾಕ್ಷಿಯ ಗೊಂಚಲುಗಳಂತಿರಲಿ. ನಿನ್ನ ಉಸಿರಿನ ವಾಸನೆಯು ಸೇಬುಹಣ್ಣುಗಳಂತಿರಲಿ.
9 ನಿನ್ನ ಬಾಯಿ ಉತ್ತಮವಾದ ದ್ರಾಕ್ಷಾರಸದಂತಿರಲಿ. ನನ್ನ ಪ್ರಿಯೆಗಾಗಿ ಈ ದ್ರಾಕ್ಷಾರಸವು ಮೆಲ್ಲನೆ ಇಳಿದುಹೋಗುವುದು. ನಿದ್ರಿಸುವವರ ತುಟಿಗಳಲ್ಲಿ ಅದು ಸರಾಗವಾಗಿ ಹರಿದುಹೋಗುವುದು.

### ಪ್ರಿಯತಮೆ ಪ್ರಿಯಕರನಿಗೆ

10 ನಾನು ನನ್ನ ಪ್ರಿಯನವಳೇ. ಅವನಿಗೆ ನನ್ನ ಮೇಲೇ ಆಸೆ.
11 ನನ್ನ ಪ್ರಿಯನೇ, ಬಾ! ನಾವು ತೋಟಕ್ಕೆ ಹೋಗೋಣ, ನಾವು ಹಳ್ಳಿಗಳಲ್ಲಿ ಇರೋಣ.
12 ನಾವು ಹೊತ್ತಾರೆಯಲ್ಲಿ ಎದ್ದು ದ್ರಾಕ್ಷಾತೋಟ ಗಳಿಗೆ ಹೋಗೋಣ. ದ್ರಾಕ್ಷೆಯು ಚಿಗುರಿದೆಯೋ ಅದರ ಹೂವು ಅರಳಿದೆಯೋ ದಾಳಿಂಬೆ ಹಣ್ಣು ಗಳು ಮಾಗಿವೆಯೋ ನೋಡೋಣ. ನನ್ನ ಪ್ರೀತಿ ಯನ್ನು ನಿನಗೆ ಅಲ್ಲಿ ಸಲ್ಲಿಸುವೆನು.
13 ಕಾಮಜನಕ ಸಸಿಗಳು ಸುವಾಸನೆ ಬೀರುತ್ತವೆ, ನನ್ನ ಪ್ರಿಯನೇ, ನಾನು ನಿನಗೋಸ್ಕರ ಉಳಿಸಿದ ರುಚಿಕರವಾದ ಬಗೆಬಗೆಯ ಹೊಸ ಮತ್ತು ಹಳೆ ಹಣ್ಣುಗಳು ನಮ್ಮ ಬಾಗಿಲ ಬಳಿಯಲ್ಲಿವೆ.

8 ನೀನು ನನ್ನ ತಮ್ಮನ ಹಾಗಿದ್ದರೆ, ತಾಯಿ ಹಾಲನ್ನು ಕುಡಿಯುವ ಮಗುವಿನಂತೆ ಇದ್ದರೆ ಎಷ್ಟೋ ಚೆನ್ನಾಗಿರುತ್ತಿತ್ತು. ನಾನು ನಿನ್ನನ್ನು ಹೊರಗೆ ಕಂಡು ನಿನಗೆ ಮುದ್ದಿಡುತ್ತಿದ್ದೆನು; ಆಗ ಯಾರೂ ನನ್ನ ಮೇಲೆ ದೋಷಾರೋಪಣೆ ಮಾಡುತ್ತಿರಲಿಲ್ಲ!
2 ನಾನು ನಿನ್ನನ್ನು ನಡೆಸಿಕೊಂಡು ನನ್ನ ತಾಯಿಯ ಮನೆಗೆ, ನನ್ನ ತಾಯಿಯು ನನಗೆ ಉಪದೇಶಿಸಿದ ಕೋಣೆಗೆ ಬರುತ್ತಿದ್ದೆನು. ನಾನು ನಿನಗೆ ಸಾಂಬಾರ ಪದಾರ್ಥಗಳನ್ನು ಸೇರಿಸಿದ ದ್ರಾಕ್ಷಾರಸವನ್ನು, ದಾಳಿಂಬೆ ಹಣ್ಣಿನ ರಸವನ್ನು ಕುಡಿಯಲು ಕೊಡುತ್ತಿದ್ದೆ.

### ಪ್ರಿಯತಮೆ ಸ್ತ್ರೀಯರಿಗೆ

3 ಆಗ ನಿನ್ನ ಎಡಗೈ ನನಗೆ ತಲೆದಿಂಬಾಗಿ ನಿನ್ನ ಬಲಗೈ ನನ್ನನ್ನು ಅಪ್ಪಿಕೊಳ್ಳುತ್ತಿತ್ತು.
4 ಜೆರುಸಲೇಮಿನ ಸ್ತ್ರೀಯರೇ, ತಕ್ಕ ಕಾಲಕ್ಕೆ ಮೊದಲೇ ಪ್ರೀತಿಯನ್ನು ಹುಟ್ಟಿಸಿ ಬೆಳೆಯಿಸುವು ದಿಲ್ಲವೆಂದು ನನಗೆ ಪ್ರಮಾಣಮಾಡಿರಿ.

### ಜೆರುಸಲೇಮಿನ ಸ್ತ್ರೀಯರು

5 ತನ್ನ ಪ್ರಿಯನನ್ನು ಒರಗಿಕೊಂಡು ಅಡವಿಯಿಂದ ಬರುತ್ತಿರುವ ಈ ಯುವತಿ ಯಾರು?

### ಪ್ರಿಯತಮೆ ಪ್ರಿಯಕರನಿಗೆ

ನಾನು ನಿನ್ನನ್ನು ಸೇಬಿನ ಮರದ ಕೆಳಗೆ ಎಬ್ಬಿಸಿದೆನು. ನಿನ್ನ ತಾಯಿಯು ನಿನ್ನನ್ನು ಗರ್ಭಧರಿಸಿದ್ದು ಅಲ್ಲಿಯೇ. ನೀನು ಹುಟ್ಟಿದ್ದೂ ಅಲ್ಲಿಯೇ.
6 ನನ್ನನ್ನು ನಿನ್ನ ಹೃದಯದ ಮೇಲೆ ಮುದ್ರೆಯನ್ನಾಗಿಯೂ, ನಿನ್ನ ಬೆರಳಿನಲ್ಲಿರುವ ಮುದ್ರೆಯೊತ್ತಿದ ಉಂಗುರದಂತೆಯೂ ಇಟ್ಟುಕೋ. ಪ್ರೀತಿಯು ಮರಣದಷ್ಟೇ ಬಲಿಷ್ಠ; ಕಾಮೋದ್ರೇಕವು ಸಮಾಧಿಯಷ್ಟೇ ಬಲಿಷ್ಠ. ಅದರ ಜ್ವಾಲೆಗಳು ಧಗಧಗಿಸುವ ಬೆಂಕಿ.
7 ಜಲರಾಶಿಗಳು ಪ್ರೀತಿಯನ್ನು ನಂದಿಸಲಾರವು; ನದಿಗಳು ಪ್ರೀತಿಯನ್ನು ಮುಳುಗಿಸಲಾರವು. ಒಬ್ಬನು ಪ್ರೀತಿಗೋಸ್ಕರ ತನ್ನ ಆಸ್ತಿಯನ್ನೆಲ್ಲ ಕೊಟ್ಟು ಬಿಟ್ಟರೂ ಯಾರೂ ಅವನನ್ನು ನಿಂದಿಸುವುದಿಲ್ಲ.

---

**ಬಟ್ಟಲು** ಅಥವಾ ''ಕೆತ್ತಿದ ಪಾತ್ರೆ'' ಉಳಿಯಿಂದ ಕೆತ್ತಿ ಮಾಡಿದ ಪಾತ್ರೆ. ದ್ರಾಕ್ಷಾರಸವನ್ನು ಇದರಲ್ಲಿ ಮಿಶ್ರಣ ಮಾಡಿದ ನಂತರ ಬಟ್ಟಲುಗಳಿಗೆ ಹಾಕುತ್ತಿದ್ದರು. ಚಂದ್ರಬಿಂಬದಂತೆ ಪಾತ್ರೆ ಅಥವಾ ಅರ್ಧ ಚಂದ್ರಾಕಾರದ ಪಾತ್ರೆ'' ಎಂಬರ್ಥವನ್ನೂ ಇದು ಕೊಡಬಲ್ಲದು.

### ಪ್ರಿಯತಮೆಯ ಸಹೋದರರು

8 ನಮಗೆ ಚಿಕ್ಕ ತಂಗಿಯಿದ್ದಾಳೆ, ಆಕೆಯ ಸ್ತನಗಳು
ಇನ್ನೂ ಬೆಳೆದಿಲ್ಲ. ಆಕೆಯ ನಿಶ್ಚಿತಾರ್ಥ ದಿನದಲ್ಲಿ
ನಮ್ಮ ತಂಗಿಗೋಸ್ಕರ ನಾವೇನು ಮಾಡಬೇಕು?
9 ಆಕೆ ಕೋಟೆಯಾಗಿದ್ದರೆ ಅದರ ಮೇಲೆ ಬೆಳ್ಳಿಯ
ಗೋಪುರಗಳನ್ನು ಕಟ್ಟುತ್ತಿದ್ದೆವು. ಆಕೆ ಬಾಗಿಲಾ
ಗಿದ್ದರೆ, ಶ್ರೇಷ್ಠವಾದ ದೇವದಾರು ಮರದ ಹಲಗೆ
ಗಳಿಂದ ಅದನ್ನು ಹೊದಿಸುತ್ತಿದ್ದೆವು.

### ಪ್ರಿಯತಮೆಯು ಸಹೋದರರಿಗೆ ಕೊಡುವ ಉತ್ತರ

10 ನಾನು ಕೋಟೆ; ನನ್ನ ಸ್ತನಗಳೇ ಅದರ ಗೋಪುರ
ಗಳು. ಹೀಗೆ ಸೊಲೊಮೋನನು ನನ್ನಲ್ಲಿ ತೃಪ್ತ
ನಾದನು.
11 ಸೊಲೊಮೋನನಿಗೆ ಬಾಲ್ಹಾಮೋನಿನಲ್ಲಿ ದ್ರಾಕ್ಷಿ
ತೋಟವಿತ್ತು. ಅವನು ಅದನ್ನು ರೈತರಿಗೆ
ಒಪ್ಪಿಸಿದನು. ಪ್ರತಿಯೊಬ್ಬನು ಹಣ್ಣಿಗಾಗಿ ಒಂದು
ಸಾವಿರ ಬೆಳ್ಳಿ ನಾಣ್ಯಗಳನ್ನು ಕೊಡಬೇಕಿತ್ತು.
12 ಆದರೆ ನನ್ನ ಸ್ವಂತ ದ್ರಾಕ್ಷಿತೋಟವು ನನ್ನೆದುರಿ
ನಲ್ಲಿದೆ, ಸೊಲೊಮೋನನೇ, ಆ ಸಾವಿರ ಬೆಳ್ಳಿ
ನಾಣ್ಯಗಳು ನಿನಗಿರಲಿ. ತೋಟವನ್ನು ನೋಡಿ
ಕೊಳ್ಳುವವರಿಗೆ ಇನ್ನೂರು ಬೆಳ್ಳಿನಾಣ್ಯಗಳಿರಲಿ.

### ಪ್ರಿಯಕರ ಪ್ರಿಯತಮೆಗೆ

13 ಉದ್ಯಾನವನಗಳಲ್ಲಿ ವಾಸಿಸುವವಳೇ, ಗೆಳೆಯರು
ನಿನ್ನ ಸ್ವರ ಕೇಳಬೇಕೆಂದಿದ್ದಾರೆ, ನನಗೂ ಸಹ
ಕೇಳಿಸಲಿ.

### ಪ್ರಿಯತಮೆ ಪ್ರಿಯಕರನಿಗೆ

14 ನನ್ನ ಪ್ರಿಯನೇ, ತ್ವರೆಪಡು. ಸುಗಂಧಸಸ್ಯ ಪರ್ವತ
ಗಳ ಮೇಲೆ ಸಾರಂಗದಂತೆಯೂ ಪ್ರಾಯದ
ಜಿಂಕೆಯಂತೆಯೂ ಇರು.

# ಯೆಶಾಯ

1 ಯೆಶಾಯನಿಗೆ ಆದ ದೈವದರ್ಶನ. ಯೆಶಾಯನು ಆಮೋಚನ ಮಗ. ಯೆಹೂದ ಮತ್ತು ಜೆರುಸಲೇಮಿನಲ್ಲಿ ನಡೆಯಲಿದ್ದ ಘಟನೆಗಳ ಬಗ್ಗೆ ದೇವರು ಯೆಶಾಯನಿಗೆ ಈ ದರ್ಶನ ನೀಡಿದನು; ಯೆಹೂದದ ಅರಸನಾದ ಉಜ್ಜೀಯ, ಯೋಥಾಮ, ಆಹಾಜ ಮತ್ತು ಹಿಜ್ಕೀಯರ ಕಾಲದಲ್ಲಿ ಯೆಶಾಯನಿಗೆ ಈ ದರ್ಶನವಾಯಿತು.

### ಸ್ವಜನರ ವಿರುದ್ಧವಾಗಿ ದೇವರ ದೂರು

2 ಭೂಮ್ಯಾಕಾಶಗಳೇ, ಯೆಹೋವನ ಮಾತನ್ನು ಆಲಿಸಿರಿ! ಯೆಹೋವನು ಹೇಳುತ್ತಿದ್ದಾನೆ,

''ನಾನು ಸಾಕಿ ಸಲಹಿದ ಮಕ್ಕಳೇ ನನಗೆ ದ್ರೋಹ
ಮಾಡಿದ್ದಾರೆ.
3 ಎತ್ತು ತನ್ನ ದಣಿಯನ್ನು ತಿಳಿದದೆ; ಕತ್ತೆಯು ತನ್ನ
ದಣಿಯ ಕೊಟ್ಟಿಗೆಯನ್ನು ತಿಳಿದದೆ. ಆದರೆ
ಇಸ್ರೇಲರು ನನ್ನನ್ನು ತಿಳಿದೇ ಇಲ್ಲ. ನನ್ನ ಜನರು
ನನ್ನನ್ನು ಅರ್ಥಮಾಡಿಕೊಳ್ಳುವುದೇ ಇಲ್ಲ.''

4 ಇಸ್ರೇಲ್ ದೇಶವು ಪಾಪದಿಂದ ತುಂಬಿಹೋಗಿದೆ; ಅವರ ಪಾಪವೇ ಅವರಿಗೆ ಭಾರವಾದ ಹೊರೆಯಾಗಿದೆ; ಅವರು ದುಷ್ಟ ಕುಟುಂಬಗಳ ಕೆಟ್ಟಮಕ್ಕಳಂತಿದ್ದಾರೆ. ಅವರು ಯೆಹೋವನನ್ನು ತ್ಯಜಿಸಿದ್ದಾರೆ; ಇಸ್ರೇಲಿನ ಪರಿಶುದ್ಧ ದೇವರನ್ನು ಅವಮಾನಪಡಿಸಿದ್ದಾರೆ; ಅವರು ಆತನನ್ನು ತೊರೆದು ಅಪರಿಚಿತನೋ ಎಂಬಂತೆ ಪರಿಗಣಿಸಿದ್ದಾರೆ.

5 ''ನಾನು ನಿಮ್ಮನ್ನು ಯಾಕೆ ಶಿಕ್ಷಿಸುತ್ತಲೇ ಇರಬೇಕು? ನಾನು ನಿಮ್ಮನ್ನು ಶಿಕ್ಷಿಸಿದೆನು, ಆದರೆ ನೀವು ಬದಲಾಗಲಿಲ್ಲ. ನೀವು ನನಗೆ ವಿರುದ್ಧವಾಗಿ ಏಳುತ್ತಲೇ ಇದ್ದೀರಿ. ಈಗ ಪ್ರತಿಯೊಂದು ತಲೆಯೂ ಪ್ರತಿಯೊಂದು ಹೃದಯವೂ ರೋಗಕ್ಕೆ ಬಲಿಯಾಗಿದೆ.
6 ನಿಮ್ಮ ಅಂಗಾಲಿನಿಂದ ಹಿಡಿದು ನೆತ್ತಿಯವರೆಗೂ ನಿಮ್ಮ ದೇಹದಲ್ಲೆಲ್ಲಾ ಗಾಯಗಳೂ ಬಾಸುಂಡೆಗಳೂ ಹುಣ್ಣುಗಳೂ ತುಂಬಿಕೊಂಡಿವೆ. ಆದರೆ ಆ ಹುಣ್ಣುಗಳಿಗೆ ನೀವು ಸರಿಯಾಗಿ ಚಿಕಿತ್ಸೆ ಕೊಡಲಿಲ್ಲ; ಅವುಗಳನ್ನು ಒರೆಸಲಿಲ್ಲ, ಕಟ್ಟಲಿಲ್ಲ.

7 ''ನಿಮ್ಮ ದೇಶವು ಹಾಳಾಗಿದೆ; ನಿಮ್ಮ ನಗರಗಳು ಬೆಂಕಿಯಿಂದ ಸುಡಲ್ಪಟ್ಟಿವೆ. ನಿಮ್ಮ ಶತ್ರುಗಳು ನಿಮ್ಮ ದೇಶವನ್ನು ವಶಪಡಿಸಿಕೊಂಡಿದ್ದಾರೆ; ಅನ್ಯ ದೇಶವು ಶತ್ರು ಸೈನ್ಯದಿಂದ ಹಾಳಾಗುವಂತೆಯೇ, ನಿಮ್ಮ ದೇಶವೂ ಹಾಳಾಗಿದೆ.
8 ಚೀಯೋನ್ ನಗರಿಯು ದ್ರಾಕ್ಷಾತೋಟದಲ್ಲಿರುವ ಜನಶೂನ್ಯವಾದ ಡೇರೆಯಂತಿದೆ; ಸೌತೆಯ ಹೊಲದಲ್ಲಿ ಪಾಳುಬಿದ್ದಿರುವ ಮನೆಯಂತಿದೆ; ಶತ್ರುಗಳಿಗೆ ಸೋತುಹೋದ ನಗರದಂತಿದೆ.''
9 ಆದರೆ ಸರ್ವಶಕ್ತನಾದ ಯೆಹೋವನು ಸ್ವಲ್ಪ ಮಂದಿಯನ್ನಾದರೂ ಉಳಿಸಿ ಅಲ್ಲಿ ವಾಸಿಸುವಂತೆ ಮಾಡಿದ್ದಾನೆ. ನಾವು ಸೊದೋಮ್ ಗೊಮೋರ ಪಟ್ಟಣಗಳಂತೆ ಸಂಪೂರ್ಣವಾಗಿ ನಾಶವಾಗಲಿಲ್ಲ.

### ದೇವರ ಅಪೇಕ್ಷೆ– ಯಥಾರ್ಥವಾದ ಸೇವೆ

10 ಸೊದೋಮಿನ ನಾಯಕರೇ, ಯೆಹೋವನ ಸಂದೇಶವನ್ನು ಕೇಳಿರಿ. ಗೊಮೋರದ ಜನರೇ, ಆತನ ಉಪದೇಶವನ್ನು ಕೇಳಿರಿ.

11 ಯೆಹೋವನು ಹೇಳುವುದೇನೆಂದರೆ, ''ಈ ಯಜ್ಞಗಳನ್ನೆಲ್ಲ ನೀವು ನನಗೆ ಕೊಡುತ್ತಲೇ ಇರುವುದೇಕೆ? ನಿಮ್ಮ ಆಡುಗಳ ಯಜ್ಞಗಳೂ, ಹೋರಿಗಳ, ಕುರಿಗಳ, ಆಡುಗಳ ಕೊಬ್ಬೂ ನನಗೆ ಬೇಕಿಲ್ಲ.

12 ''ನೀವು ನನ್ನನ್ನು ಸಂಧಿಸಲು ಬರುವಾಗ, ನನ್ನ ಪ್ರಾಕಾರಗಳನ್ನು ತುಳಿದುಹಾಕುವಿರಿ. ಹಾಗೆ ಮಾಡಲು ನಿಮಗೆ ಹೇಳಿದವರು ಯಾರು?''

13 ''ನಿಮ್ಮ ಅಯೋಗ್ಯವಾದ ಯಜ್ಞಗಳನ್ನು ನನ್ನ ಬಳಿಗೆ ತರಬೇಡಿ; ನಿಮ್ಮ ಧೂಪವು ನನಗೆ ಅಸಹ್ಯ; ನಿಮ್ಮ ಅಮಾವಾಸ್ಯೆಯನ್ನಾಗಲೀ ಹಬ್ಬವನ್ನಾಗಲೀ ಸಬ್ಬತ್ತನ್ನಾಗಲೀ ನಾನು ಸಹಿಸಲಾರೆ. ನಿಮ್ಮ ಪವಿತ್ರ ಕೂಟಗಳಲ್ಲಿ ನೀವು ಮಾಡುವ ದುಷ್ಟತನವನ್ನು ನಾನು ಸಹಿಸಲಾರೆ.
14 ನಿಮ್ಮ ಮಾಸಿಕಕೂಟಗಳನ್ನೂ ಸಭಾಕೂಟಗಳನ್ನೂ

ನಾನು ದ್ವೇಷಿಸುತ್ತೇನೆ. ಇವು ನನಗೆ ಭಾರವಾಗಿವೆ. ಈ
ಭಾರದಿಂದ ನಾನು ಬೇಸತ್ತು ಹೋಗಿದ್ದೇನೆ.''

15''ನೀವು ನನಗೆ ಪ್ರಾರ್ಥಿಸುವಾಗ ನಿಮ್ಮ ಕೈಗಳನ್ನೆತ್ತು
ವಿರಿ, ಆದರೆ ನಾನು ನಿಮ್ಮ ಕಡೆಗೆ ನೋಡುವುದಿಲ್ಲ. ನೀವು
ಹೆಚ್ಚೆಚ್ಚಾಗಿ ಪ್ರಾರ್ಥಿಸುವಿರಿ, ಆದರೂ ನಾನು ನಿಮಗೆ ಕಿವಿ
ಗೊಡುವುದಿಲ್ಲ. ಯಾಕೆಂದರೆ ನಿಮ್ಮ ಕೈಗಳು ರಕ್ತದಿಂದ
ತುಂಬಿವೆ.

16''ನಿಮ್ಮನ್ನು ಶುದ್ಧ ಮಾಡಿಕೊಳ್ಳಿರಿ; ಶುಚಿಪಡಿಸಿ
ಕೊಳ್ಳಿರಿ. ನಿಮ್ಮ ದುಷ್ಕೃತ್ಯಗಳನ್ನು ತೊಲಗಿಸಿರಿ; ಅವು
ಗಳನ್ನು ನೋಡಲು ನನಗೆ ಮನಸ್ಸಿಲ್ಲ. ಕೆಟ್ಟದ್ದನ್ನು ಮಾಡದೆ
ಒಳ್ಳೆಯದನ್ನೇ ಮಾಡಿರಿ; 17 ಒಳ್ಳೆಯದನ್ನೇ ಮಾಡಲು
ಅಭ್ಯಾಸ ಮಾಡಿಕೊಳ್ಳಿರಿ. ಬೇರೆಯವರೊಂದಿಗೆ ನ್ಯಾಯ
ವಂತರಾಗಿರಿ; ಕೆಡುಕರಿಗೆ ದಂಡನೆ ವಿಧಿಸಿರಿ; ಅನಾಥರಿಗೆ
ಸಹಾಯ ಮಾಡಿರಿ; ವಿಧವೆಯರಿಗೂ ಸಹಾಯ
ಮಾಡಿರಿ.''

18ಯೆಹೋವನು ಇಂತೆನ್ನುತ್ತಾನೆ: ''ಬನ್ನಿರಿ, ನಾವು
ಚರ್ಚೆಮಾಡೋಣ. ನಿಮ್ಮ ಪಾಪಗಳು ಕೆಂಪಾಗಿದ್ದರೂ
ಅವುಗಳನ್ನು ತೊಳೆದಾಗ ನೀವು ಹಿಮದಂತೆ ಬಿಳುಪಾಗು
ವಿರಿ. ನಿಮ್ಮ ಪಾಪಗಳು ಕಡುಕೆಂಪಾಗಿದ್ದರೂ ನೀವು ಉಣ್ಣೆ
ಯಂತೆ ಬೆಳ್ಳಗಾಗುವಿರಿ.''

19''ನೀವು ನನ್ನ ಮಾತನ್ನು ಕೇಳಿದರೆ ನಿಮ್ಮ ದೇಶದ
ಉತ್ತಮ ಫಸಲುಗಳಿಂದ ಆನಂದಿಸುವಿರಿ. 20ನನ್ನ ಮಾತು
ಗಳನ್ನು ಕೇಳದೆಹೋದರೆ ನೀವು ನನಗೆ ವಿರೋಧಿ
ಗಳಾಗಿದ್ದೀರಿ. ನಿಮ್ಮ ವೈರಿಯು ನಿಮ್ಮನ್ನು ನಾಶ
ಮಾಡುವನು.''

ಯೆಹೋವನೇ ಇವುಗಳನ್ನು ನುಡಿದಿದ್ದಾನೆ.

### ಜೆರುಸಲೇಮು ದೇವರಿಗೆ ದ್ರೋಹಮಾಡಿದೆ

21ದೇವರು ಹೇಳುವುದೇನೆಂದರೆ: ''ಜೆರುಸಲೇಮಿನ
ಕಡೆಗೆ ನೋಡಿರಿ. ಆಕೆ ನನ್ನ ಮೇಲೆ ನಂಬಿಕೆ ಇಟ್ಟು
ಹಿಂಬಾಲಿಸಿದಂಥ ನಗರಿಯಾಗಿದ್ದಳು. ಆದರೆ ಈಗ ಆಕೆ
ಸೂಳೆಯಾಗಲು ಕಾರಣವೇನು? ಈಗ ಆಕೆ ನನ್ನನ್ನು
ಹಿಂಬಾಲಿಸುತ್ತಿಲ್ಲ. ಜೆರುಸಲೇಮು ನ್ಯಾಯನೀತಿಗಳಿಂದ
ತುಂಬಿರಬೇಕಿತ್ತು. ಅಲ್ಲಿ ವಾಸಿಸುವ ಜನರು ದೇವರ ಇಚ್ಛೆ
ಯಂತೆ ನಡೆಯಬೇಕಿತ್ತು ಆದರೆ ಈಗ ಕೊಲೆಗಡುಕರು
ಅಲ್ಲಿ ವಾಸಿಸುತ್ತಿದ್ದಾರೆ.

22''ಒಳ್ಳೆಯತನವು ಬೆಳ್ಳಿಯಂತಿದೆ. ಆದರೆ ನಿಮ್ಮ
ಬೆಳ್ಳಿಯು ಬೆಲೆಯಿಲ್ಲದ್ದಾಗಿದೆ. ನಿಮ್ಮ ದ್ರಾಕ್ಷಾರಸ (ಒಳ್ಳೆ
ಯತನ) ನೀರಿನೊಂದಿಗೆ ಬೆರತಿದೆ. ಅದು ತೆಳ್ಳಗಾಗಿದೆ.
23ನಿಮ್ಮನ್ನಾಳುವವರು ದಂಗೆಕೋರರಾಗಿದ್ದಾರೆ; ಕಳ್ಳರ
ಮಿತ್ರರಾಗಿದ್ದಾರೆ; ಲಂಚಕೋರರಾಗಿದ್ದಾರೆ; ಹಣಕ್ಕಾಗಿ
ಕೆಟ್ಟದ್ದನ್ನು ಮಾಡುತ್ತಾರೆ; ಹಣಕ್ಕಾಗಿ ಮೋಸ ಮಾಡು
ತ್ತಾರೆ. ಅನಾಥರಿಗೆ ಸಹಾಯ ಮಾಡದವರಾಗಿದ್ದಾರೆ;
ವಿಧವೆಯರ ಅಗತ್ಯತೆಗಳಿಗೆ ಲಕ್ಷ್ಯಕೊಡದವ
ರಾಗಿದ್ದಾರೆ.''

24ಇವೆಲ್ಲವುಗಳ ಕುರಿತಾಗಿ ಒಡೆಯನೂ ಇಸ್ರೇಲಿನ
ಸರ್ವಶಕ್ತನೂ ಆಗಿರುವ ಯೆಹೋವನು ಹೇಳುವದೇ
ನೆಂದರೆ: ''ನನ್ನ ಶತ್ರುಗಳೇ, ನಾನು ನಿಮ್ಮನ್ನು ಶಿಕ್ಷಿಸು
ವೆನು. ಇನ್ನು ಮುಂದೆ ನೀವು ನನಗೆ ಯಾವ ಕೇಡನ್ನೂ
ಮಾಡುವುದಿಲ್ಲ. 25ಜನರು ಬೆಳ್ಳಿಯನ್ನು ಶುದ್ಧ ಮಾಡು
ವದಕ್ಕೆ ದ್ರವವನ್ನು* ಉಪಯೋಗಿಸುವರು. ಅದೇ ರೀತಿ
ಯಲ್ಲಿ ನಿಮ್ಮ ತಪ್ಪುಗಳನ್ನೆಲ್ಲ ನಾನು ಶುದ್ಧ ಮಾಡುವೆನು.
ನಿಮ್ಮಲ್ಲಿರುವ ಎಲ್ಲಾ ಅಯೋಗ್ಯವಾದವುಗಳನ್ನು ತೆಗೆದು
ಬಿಡುವೆನು. 26ಆರಂಭದಲ್ಲಿ ನಿಮಗಿದ್ದಂತಹ ನ್ಯಾಯಾಧೀ
ಶರನ್ನು ನಾನು ತಿರುಗಿ ಬರಮಾಡುವೆನು. ನಿಮ್ಮ ಸಲಹೆ
ಗಾರರು ಹಿಂದಿನ ಕಾಲದ ಸಲಹೆಗಾರರಂತೆ ಇರುವರು.
ಆಗ ನೀನು 'ನ್ಯಾಯವಾದ ಮತ್ತು ನಂಬಿಗಸ್ತಿಕೆಯುಳ್ಳ
ಪಟ್ಟಣ' ವೆಂದು ಕರೆಯಲ್ಪಡುವೆ.''

27ದೇವರು ಒಳ್ಳೆಯವನು; ನ್ಯಾಯವನ್ನೇ ಮಾಡುವ
ವನು; ಆತನು ಚೀಯೋನನ್ನೂ ತನ್ನ ಬಳಿಗೆ ಬರುವ ಜನ
ರನ್ನೂ ರಕ್ಷಿಸಿ ಕಾಪಾಡುವನು. 28ಆದರೆ ಎಲ್ಲಾ ಕೊಲೆ
ಗಾರರೂ ದುಷ್ಟರೂ ನಾಶಮಾಡಲ್ಪಡುವರು. ಅವರು
ಯೆಹೋವನನ್ನು ಹಿಂಬಾಲಿಸುವವರಲ್ಲ.

29ಮುಂದಿನ ದಿವಸಗಳಲ್ಲಿ ಜನರು ತಾವು ಆರಾಧಿಸಲು
ಆರಿಸಿಕೊಳ್ಳುವ ಓಕ್ ಮರಗಳಲ್ಲಿಯೂ ವಿಶೇಷವಾದ
ಉದ್ಯಾನವನಗಳಲ್ಲಿಯೂ ನಾಚಿಕೆಪಡುವರು. 30ಎಲೆ
ಒಣಗಿಹೋದ ಏಲಾ ಮರಗಳಂತೆ ನೀವು ಇದ್ದೀರಿ. ನೀರಿ
ಲ್ಲದೆ ಸಾಯುತ್ತಿರುವ ಉದ್ಯಾನವನದಂತೆ ನೀವು ಇದ್ದೀರಿ.
31ಬಲಿಷ್ಠರು ಸಣ್ಣಗಿರುವ ಒಣಮರದ ತುಂಡಿನಂತಿರು
ವರು. ಆ ಜನರು ಮಾಡುವ ಕಾರ್ಯಗಳು ಬೆಂಕಿಯನ್ನು
ಪ್ರಾರಂಭಿಸುವ ಕಿಡಿಯಂತಿರುವವು. ಅವರ ಕಾರ್ಯಗ
ಳೆಲ್ಲಾ ಸುಟ್ಟು ಹೋಗುವವು; ಆ ಬೆಂಕಿಯನ್ನು ಯಾರೂ
ನಿಲ್ಲಿಸಲಾರರು.

2 ಆಮೋಚನ ಮಗನಾದ ಯೆಶಾಯನು ಯೆಹೂದ
ಮತ್ತು ಜೆರುಸಲೇಮಿನ ಬಗ್ಗೆ ನೋಡಿದ ದರ್ಶನ.
2ಕೊನೆಯ ದಿನಗಳಲ್ಲಿ ಯೆಹೋವನಾಲಯದ ಪರ್ವತವು
ಎಲ್ಲಾ ಬೆಟ್ಟಗಳಿಗಿಂತಲೂ ಮಹೋನ್ನತವಾದ ಪರ್ವತ
ವಾಗಿರುವುದು. 3ಅಲ್ಲಿಗೆ ಎಲ್ಲಾ ದೇಶಗಳಿಂದ ಜನರು
ಸತತವಾಗಿ ತೊರೆಗಳಂತೆ ಬರುವರು. ''ಬನ್ನಿ, ನಾವು
ಯೆಹೋವನ ಪರ್ವತಕ್ಕೆ ಹೋಗೋಣ. ಯಾಕೋಬನ
ದೇವರ ಆಲಯಕ್ಕೆ ಹೋಗೋಣ. ದೇವರು ನಮಗೆ ಜೀವ
ಮಾರ್ಗವನ್ನು ಅಲ್ಲಿ ಬೋಧಿಸುವನು. ನಾವು ಆತನನ್ನು
ಹಿಂಬಾಲಿಸೋಣ'' ಎಂದು ಹೇಳುವರು.

---

**ದ್ರವ** ತೊಳೆಯಲು ಉಪಯೋಗಿಸುವ ಉಪ್ಪು ಮಿಶ್ರಿತವಾದ ದ್ರವ.

ಯೆಹೋವನ ಸಂದೇಶ, ಬೋಧನೆಗಳು ಜೆರುಸಲೇಮಿ
ನಲ್ಲಿರುವ ಚೀಯೋನ್ ಪರ್ವತದಿಂದ ಪ್ರಾರಂಭವಾಗಿ
ಇಡೀ ಪ್ರಪಂಚಕ್ಕೆ ಹರಡುವದು. 4 ಈಗ ಎಲ್ಲಾ ದೇಶಗಳಿಗೆ
ದೇವರೇ ನ್ಯಾಯಧೀಶನಾಗಿರುವನು. ಅನೇಕ ಜನರ
ತರ್ಕಗಳನ್ನು ದೇವರು ಕೊನೆಗಾಣಿಸುವನು. ಆ ಜನರು
ಯುದ್ಧಕ್ಕಾಗಿ ಆಯುಧಗಳನ್ನು ಉಪಯೋಗಿಸುವದನ್ನು
ನಿಲ್ಲಿಸುವರು; ತಮ್ಮ ಖಡ್ಗಗಳಿಂದ ಅವರು ನೇಗಿಲು ಗುಳಗ
ಳನ್ನು ತಯಾರಿಸುವರು; ತಮ್ಮ ಬರ್ಜಿಗಳಿಂದ ಸಸಿಗಳನ್ನು
ಕೊಯ್ಯುವ ಸಾಧನವನ್ನು ಮಾಡುವರು. ಪರಸ್ಪರ ಹೊಡೆ
ದಾಡಿಕೊಳ್ಳುವದನ್ನು ಜನರು ನಿಲ್ಲಿಸುವರು. ಇನ್ನೆಂದಿಗೂ
ಜನರು ಯುದ್ಧಾಭ್ಯಾಸ ತರಬೇತಿಯನ್ನು
ಹೊಂದುವುದಿಲ್ಲ.

5 ಯಾಕೋಬನ ಸಂತತಿಯವರೇ, ನೀವು ಯೆಹೋವನ
ಬೆಳಕನ್ನು ಹಿಂಬಾಲಿಸುವವರಾಗಬೇಕು. 6 ನೀವು ನಿಮ್ಮ
ಜನರನ್ನು ತೊರೆದದ್ದರಿಂದ ನಾನು ನಿಮಗೆ ಹೀಗೆ ಹೇಳಿ
ದೆನು. ಪೂರ್ವದೇಶದ ಜನರಿಗಿರುವ ತಪ್ಪು ತಿಳುವಳಿ
ಕೆಯು ನಿಮ್ಮ ಜನರಲ್ಲಿ ತುಂಬಿಹೋಯಿತು. ಫಿಲಿಷ್ಟಿಯ
ರಂತೆ ನಿಮ್ಮ ಜನರು ಭವಿಷ್ಯ ಹೇಳಲು ಪ್ರಯತ್ನಿಸಿ ಆ ತಪ್ಪು
ತಿಳುವಳಿಕೆಗೆ ಮಾರುಹೋದರು. 7 ನಿಮ್ಮ ದೇಶವು ಬೆಳ್ಳಿ
ಬಂಗಾರಗಳಿಂದಲೂ ಮಿತಿಯಿಲ್ಲದ ನಿಕ್ಷೇಪಗಳಿಂದಲೂ
ಕುದುರೆಗಳಿಂದಲೂ ಅಸಂಖ್ಯಾತವಾದ ರಥಗಳಿಂದಲೂ
ತುಂಬಿ ಹೋಯಿತು. 8 ನಿಮ್ಮ ದೇಶವು ಕೈಯಿಂದ ಮಾಡಿದ
ವಿಗ್ರಹಗಳಿಂದ ತುಂಬಿದ್ದು ಜನರು ಅವುಗಳನ್ನು ಆರಾಧಿ
ಸುತ್ತಾರೆ. 9 ಜನರು ಕೆಟ್ಟದಾರಿಯಲ್ಲಿ ಹೋಗುತ್ತಿದ್ದಾರೆ;
ಹೀನಸ್ಥಿತಿಯಲ್ಲಿ ಮುಂದುವರಿಯುತ್ತಿದ್ದಾರೆ. ದೇವರೇ,
ನೀನು ಅವರನ್ನು ಖಂಡಿತವಾಗಿಯೂ ಕ್ಷಮಿಸಬೇಡ.

### ದೇವರ ವೈರಿಗಳು ಭಯಪೀಡಿತರಾಗುವರು

10 ಬಂಡೆಗಳ ಹಿಂಬದಿಯಲ್ಲಿಯೂ ಹೊಲಸಿನಲ್ಲಿಯೂ
ಅವಿತುಕೊಳ್ಳಿರಿ. ನೀವು ಯೆಹೋವನಿಗೆ ಭಯಪಟ್ಟು
ಆತನ ಮಹಾಶಕ್ತಿಗೆ ಮರೆಯಾಗಿ ಅವಿತುಕೊಳ್ಳಬೇಕು.

11 ಗರ್ವಿಷ್ಠರ ಗರ್ವವು ಕುಗ್ಗಿಸಲ್ಪಡುವುದು; ಅಹಂಕಾರಿ
ಗಳ ಅಹಂಕಾರವು ತಗ್ಗಿಸಲ್ಪಡುವುದು. ಆ ಸಮಯದಲ್ಲಿ
ಯೆಹೋವನೊಬ್ಬನೇ ಉನ್ನತೋನ್ನತವಾಗಿರುವನು.

12 ಯೆಹೋವನು ಒಂದು ವಿಶೇಷ ದಿನವನ್ನು ಯೋಜಿಸಿ
ರುತ್ತಾನೆ. ಆ ದಿನದಲ್ಲಿ ಯೆಹೋವನು ಅಹಂಕಾರಿಗ
ಳನ್ನೂ ಜಂಬ ಕೊಚ್ಚಿಕೊಳ್ಳುವವರನ್ನೂ ಶಿಕ್ಷಿಸುವನು. ಆಗ
ಆ ಅಹಂಕಾರಿಗಳನ್ನು ಜನರು ದೊಡ್ಡ ಜನರೆಂದು ಪರಿ
ಗಣಿಸುವುದಿಲ್ಲ. 13 ಆ ಅಹಂಕಾರದ ಜನರು ಲೆಬನೋ
ನಿನ ದೇವದಾರು ಮರಗಳಂತಿರುವರು. ಬಾಷಾನಿನ
ಮಹಾದೇವದಾರು ಮರಗಳಂತಿರುವರು. ಆದರೆ
ಯೆಹೋವನು ಅವರನ್ನು ಶಿಕ್ಷಿಸುವನು. 14 ಆ ಅಹಂಕಾರಿ
ಗಳು ಉನ್ನತವಾದ ಪರ್ವತಗಳಂತೆಯೂ, ಎತ್ತರವಾದ
ಬೆಟ್ಟಗಳಂತೆಯೂ ಇದ್ದಾರೆ. 15 ಅವರು ಎತ್ತರವಾದ
ಬುರುಜುಗಳಂತೆಯೂ ಬಲಿಷ್ಠವಾದ ಕೋಟೆಗೋಡೆ
ಯಂತೆಯೂ ಇರುವರು. ಆದರೆ ದೇವರು ಅವರನ್ನು
ಶಿಕ್ಷಿಸುವನು. 16 ಆ ಅಹಂಕಾರಿಗಳು ತಾರ್ಷೀಷಿನ ದೊಡ್ಡ
ಹಡಗುಗಳಂತಿದ್ದಾರೆ. (ಈ ಹಡಗುಗಳಲ್ಲಿ ಶ್ರೇಷ್ಠವಾದ
ವಸ್ತುಗಳು ತುಂಬಿವೆ.) ಆದರೆ ದೇವರು ಆ ಅಹಂಕಾರಿ
ಗಳನ್ನು ಶಿಕ್ಷಿಸುವನು.

17 ಆ ಸಮಯದಲ್ಲಿ ಜನರು ತಮ್ಮ ಅಹಂಕಾರವನ್ನು
ತೋರಿಸುವುದಿಲ್ಲ. ಈಗ ಅಹಂಕಾರಿಗಳಾಗಿರುವವರು
ನೆಲದತನಕ ಬಗ್ಗಿ ಹೋಗುವರು. ಆ ಸಮಯದಲ್ಲಿ
ಯೆಹೋವನೊಬ್ಬನೇ ಉನ್ನತೋನ್ನತವಾಗಿರುವನು.
18 ಎಲ್ಲಾ ವಿಗ್ರಹಗಳು ಇಲ್ಲವಾಗುವವು. 19 ಜನರು ಬಂಡೆ
ಗಳ ಸಂದುಗಳಲ್ಲಿಯೂ ನೆಲದ ಬಿರುಕುಗಳಲ್ಲಿಯೂ
ಅಡಗಿಕೊಳ್ಳುವರು. ಜನರು ಯೆಹೋವನಿಗೂ ಆತನ
ಪರಾಕ್ರಮಕ್ಕೂ ಭಯಪಡುವರು. ಯೆಹೋವನು ಎದ್ದು
ಈ ಪ್ರಪಂಚವನ್ನು ಅಲುಗಾಡಿಸುವಾಗ ಇವೆಲ್ಲಾ
ಸಂಭವಿಸುವವು.

20 ಆ ಸಮಯದಲ್ಲಿ ಜನರು ತಮ್ಮ ಬೆಳ್ಳಿಬಂಗಾರಗಳ
ವಿಗ್ರಹಗಳನ್ನೆತ್ತಿ ಬಿಸಾಡಿಬಿಡುವರು. (ಈ ವಿಗ್ರಹಗಳನ್ನು
ಜನರು ಪೂಜಿಸುವದಕ್ಕಾಗಿ ಮಾಡಿಕೊಂಡರು.) ಬಾವಲಿ
ಗಳೂ, ಇಲಿಗಳೂ ವಾಸಿಸುವ ಸಂದುಗಳಲ್ಲಿ ಈ ವಿಗ್ರಹ
ಗಳನ್ನು 21 ಜನರು ಬಿಸಾಡಿ, ಸಂದುಗೊಂದುಗಳಲ್ಲಿ ಅಡಗಿ
ಕೊಳ್ಳುವರು. ಯೆಹೋವನಿಗೂ ಆತನ ಮಹಾಶಕ್ತಿಗೂ
ಹೆದರಿ ಅವರು ಹಾಗೆ ಮಾಡುವರು. ಯೆಹೋವನು ಎದ್ದು
ಭೂಮಿಯನ್ನು ಅಲುಗಾಡಿಸುವ ಸಮಯದಲ್ಲಿ ಇವೆಲ್ಲಾ
ಸಂಭವಿಸುವವು.

### ಇಸ್ರೇಲು ದೇವರ ಮೇಲೆ ನಂಬಿಕೆ ಇಡಬೇಕು

22 ನಿಮ್ಮ ರಕ್ಷಣೆಗಾಗಿ ನೀವು ಇತರರ ಮೇಲೆ ನಂಬಿಕೆ
ಇಡಕೂಡದು. ಅವರು ಕೇವಲ ಸಾಯುವ ಮನುಷ್ಯ
ರಷ್ಟೇ. ಆದುದರಿಂದ ಅವರನ್ನು ನೀವು ದೇವರಂತೆ ಬಲಿಷ್ಠ
ರೆಂದು ನೆನಸಬಾರದು.

3 ನಾನು ಹೇಳುವದನ್ನೆಲ್ಲಾ ಮನದಟ್ಟುಮಾಡಿಕೊಳ್ಳಿರಿ.
ನಮ್ಮ ಒಡೆಯನೂ ಸರ್ವಶಕ್ತನಾದವನೂ ಯೆಹೂದ
ಮತ್ತು ಇಸ್ರೇಲಿನ ಆಧಾರಗಳನ್ನೆಲ್ಲಾ ತೆಗೆದುಬಿಡುವನು.
ಆತನು ಅವರ ಎಲ್ಲಾ ಆಹಾರವನ್ನೂ ನೀರನ್ನೂ ತೆಗೆದು
ಬಿಡುವನು. 2 ಆತನು ಎಲ್ಲಾ ವೀರರನ್ನೂ ಮಹಾಸೈನಿಕ
ರನ್ನೂ ತೆಗೆದುಬಿಡುವನು. ದೇವರು ಎಲ್ಲಾ ನ್ಯಾಯಾಧೀಶ
ರನ್ನು, ಪ್ರವಾದಿಗಳನ್ನು, ಹಿರಿಯರನ್ನು, ಇಂದ್ರಜಾಲಗಾ
ರರನ್ನು ತೆಗೆದುಬಿಡುವನು. 3 ದೇವರು ಸೇನಾಪತಿಗಳನ್ನೂ

ಸರ್ಕಾರದ ಅಧಿಪತಿಗಳನ್ನೂ ತೆಗೆದುಬಿಡುವನು. ಆತನು
ಉತ್ತಮ ಸಲಹೆಗಾರರನ್ನೂ ಮಾಂತ್ರಿಕರನ್ನೂ ಭವಿಷ್ಯ
ಹೇಳುವವರನ್ನೂ ತೊಲಗಿಸುವನು.
4ಯೆಹೋವನು ಹೇಳುವುದೇನೆಂದರೆ: ''ನಾನು
ಬಾಲಕರನ್ನು ನಿಮ್ಮ ನಾಯಕರನ್ನಾಗಿ ಮಾಡುವೆನು.
5ಪ್ರಜೆಗಳು ಒಬ್ಬರಿಗೊಬ್ಬರು ವಿರೋಧಿಗಳಾಗುವರು;
ಬಾಲಕರು ಹಿರಿಯರನ್ನು ಗೌರವಿಸರು. ಸಾಮಾನ್ಯರು
ಗಣ್ಯವ್ಯಕ್ತಿಗಳನ್ನು ಸನ್ಮಾನಿಸರು.
6ಆ ಸಮಯದಲ್ಲಿ ಒಬ್ಬನು ತನ್ನ ಸ್ವಂತ ಕುಟುಂಬದ
ಸಹೋದರನನ್ನು ಹಿಡಿದು, ''ನಿನಗೆ ನಿಲುವಂಗಿಯದೆ.
ಆದುದರಿಂದ ನೀನು ನಮಗೆ ನಾಯಕನಾಗು. ಈ ಅವ
ಶೇಷಗಳೆಲ್ಲಾ ನಿನಗೆ ಅಧೀನವಾಗಿರಲಿ'' ಎಂದು
ಹೇಳುವರು.
7ಆದರೆ ಆ ಸಹೋದರನು ಎದ್ದುನಿಂತು, ''ನನ್ನಿಂದ
ಆಗುವುದಿಲ್ಲ, ನನ್ನ ಮನೆಯಲ್ಲಿ ಸಾಕಷ್ಟು ಧಾನ್ಯವಾಗಲೀ,
ಬಟ್ಟೆಯಾಗಲೀ ಇಲ್ಲ. ನನ್ನನ್ನು ನಾಯಕನನ್ನಾಗಿ ಮಾಡ
ಬೇಡಿ'' ಎಂದು ಹೇಳುವನು.
8ಜೆರುಸಲೇಮ್ ಮುಗ್ಗರಿಸಿಬಿದ್ದು ಕೆಟ್ಟಕಾರ್ಯ
ಗಳನ್ನು ಮಾಡಿದ್ದರಿಂದ ಹೀಗಾಗುವದು. ಯೆಹೂದವು
ಪಾಪದಲ್ಲಿ ಬಿದ್ದು ದೇವರನ್ನು ಹಿಂಬಾಲಿಸುವುದನ್ನು
ನಿಲ್ಲಿಸಿಯದೆ. ಅವರಾಡುವ ಮಾತುಗಳು, ಮಾಡುವ
ಕ್ರಿಯೆಗಳು ಯೆಹೋವನಿಗೆ ವಿರುದ್ಧವಾಗಿವೆ. ಯೆಹೋ
ವನ ಮಹಿಮಾಶಕ್ತಿಯಿಂದ ಕೂಡಿದ ಕಣ್ಣುಗಳು ಇವೆಲ್ಲ
ವನ್ನು ನೋಡುವವು.
9ಜನರ ಮುಖಗಳೇ ಅವರ ದುಷ್ಕಾರ್ಯಗಳನ್ನು ಎತ್ತಿ
ತೋರಿಸುವವು. ಅವರು ತಮ್ಮ ಪಾಪಗಳಿಗಾಗಿ ಹೆಚ್ಚಳ
ಪಡುವರು. ಅವರು ಸೊದೋಮಿನ ಜನರಂತಿದ್ದಾರೆ.
ತಮ್ಮ ಪಾಪಗಳನ್ನು ಯಾರು ನೋಡಿದರೂ ಅವರಿಗೆ ಚಿಂತೆ
ಯಿಲ್ಲ. ಇದು ನಿಜವಾಗಿಯೂ ಭಯಂಕರವಾದದ್ದು.
ಅವರು ತಮಗೆ ಬಹಳ ಸಂಕಟಗಳನ್ನು ಬರಮಾಡಿ
ಕೊಂಡಿದ್ದಾರೆ.
10ಒಳ್ಳೆಯವರಿಗೆ ಒಳ್ಳೆಯವುಗಳೇ ಸಂಭವಿಸುತ್ತವೆ
ಎಂಬುದಾಗಿ ತಿಳಿಸು. ಅವರು ಮಾಡುವ ಒಳ್ಳೆಯ ಕಾರ್ಯ
ಗಳಿಗಾಗಿ ಅವರಿಗೆ ಬಹುಮಾನ ದೊರೆಯುವುದು.
11ಆದರೆ ದುಷ್ಟರಿಗೆ ಕೆಡುಕು ಸಂಭವಿಸುವದು. ಅವರಿಗೆ
ಬಹಳ ಸಂಕಟಗಳು ಬಂದೊದಗುವವು. ಅವರು ಮಾಡಿ
ರುವ ಎಲ್ಲಾ ದುಷ್ಟ ಕ್ರಿಯೆಗಳಿಗೆ ಶಿಕ್ಷೆಕೊಡಲ್ಪಡುವದು.
12ಮಕ್ಕಳು ನನ್ನ ಜನರನ್ನು ಸೋಲಿಸಿಬಿಡುವರು.
ಸ್ತ್ರೀಯರು ನನ್ನ ಜನರನ್ನು ಆಳುವರು. ನನ್ನ ಜನರೇ,
ನಿಮ್ಮ ಮಾರ್ಗದರ್ಶಕರು ನಿಮ್ಮನ್ನು ತಪ್ಪುದಾರಿಯಲ್ಲಿ
ನಡಿಸುವರು; ಸರಿಯಾದ ದಾರಿಯಿಂದ ನಿಮ್ಮನ್ನು ಅಡ್ಡ
ದಾರಿಗೆ ನಡಿಸುವರು.

## ದೇವರು ತನ್ನ ಜನರ ಬಗ್ಗೆ ಮಾಡಿದ ತೀರ್ಮಾನ

13ಯೆಹೋವನು ತನ್ನ ಜನರಿಗೆ ನ್ಯಾಯತೀರಿಸಲು
ನಿಂತಿದ್ದಾನೆ. 14ನಾಯಕರಿಗೂ ಹಿರಿಯರಿಗೂ ಅವರು
ಮಾಡಿದ ಕಾರ್ಯಗಳ ವಿರುದ್ಧವಾಗಿ ಆತನು ನ್ಯಾಯ
ತೀರಿಸುವನು.
ಯೆಹೋವನು ಹೇಳುವುದೇನೆಂದರೆ, ''ನೀವು ದಾಕ್ಷಾ
ತೋಟವನ್ನು (ಯೆಹೂದವನ್ನು) ಸುಟ್ಟುಹಾಕಿದ್ದೀರಿ;
ಬಡಜನರಿಂದ ನೀವು ಕಿತ್ತುಕೊಂಡ ವಸ್ತುಗಳನ್ನು
ಈಗಲೂ ನಿಮ್ಮ ಮನೆಗಳಲ್ಲಿ ಇಟ್ಟುಕೊಂಡಿದ್ದೀರಿ. 15ನನ್ನ
ಜನರನ್ನು ಕುಗ್ಗಿಸಲು ನಿಮಗೆ ಯಾವ ಅಧಿಕಾರವಿದೆ?
ಬಡಜನರ ಮುಖವನ್ನು ಧೂಳಿನಲ್ಲಿ ಹಾಕಿ ಉಜ್ಜಲು
ನಿಮಗೆ ಯಾವ ಅಧಿಕಾರವಿದೆ?'' ಇದು ನನ್ನ ಒಡೆಯನೂ
ಸರ್ವಶಕ್ತನೂ ಆಗಿರುವ ಯೆಹೋವನ ನುಡಿಗಳು.
16ಯೆಹೋವನು ಹೇಳುವದೇನೆಂದರೆ; ''ಚೀಯೋ
ನಿನ ಸ್ತ್ರೀಯರು ವಯ್ಯಾರದಿಂದ ತಲೆಯಾಡಿಸುತ್ತಾ, ಕುಡಿ
ನೋಟ ಬೀರುತ್ತಾ, ಕುಲುಕಿ ಹೆಜ್ಜೆಯಿಡುತ್ತಾ, ಕಾಲು
ಗೆಜ್ಜೆಯನ್ನು ಝುಣಝುಣಿಸುತ್ತಾ ನಡೆಯುತ್ತಾರೆ.''
17ನನ್ನ ಒಡೆಯನಾದ ಯೆಹೋವನು ಚೀಯೋನಿನ
ಸ್ತ್ರೀಯರ ತಲೆಯ ಮೇಲೆ ಹುಣ್ಣುಗಳನ್ನು ಬರಮಾಡಿ
ಅವರ ತಲೆಗೂದಲು ಉದುರಿ ತಲೆಬೋಳಾಗುವಂತೆ
ಮಾಡುವನು. 18ಆ ಸಮಯದಲ್ಲಿ ಆತನು ಅವರ ಎಲ್ಲಾ
ವಸ್ತುಗಳನ್ನು ಅವರಿಂದ ತೆಗೆದುಬಿಡುವನು. ಅವರ ಕಾಲು
ಸರಗಳನ್ನು, ಸೂರ್ಯಚಂದ್ರಾಕಾರದ ಕೊರಳಿನ ಸರಗ
ಳನ್ನು, 19ಕಿವಿಯೋಲೆಗಳನ್ನು, ಕೈಬಳೆಗಳನ್ನು, ಸೆರಗುವಸ್ತ್ರ
ಗಳನ್ನು, 20ರುಮಾಲುಗಳನ್ನು, ಸೊಂಟಪಟ್ಟಿಯನ್ನು, ಪರಿ
ಮಳ ದ್ರವ್ಯವನ್ನು, ತಾಯಿತಿಗಳನ್ನು, 21ಮುದ್ರೆಯುಂಗುರ
ವನ್ನು, ಮತ್ತು ಮೂಗುತಿಗಳನ್ನು ತೆಗೆದುಬಿಡುವನು.
22ಅವರ ನಯವಾದ ಮೇಲಂಗಿಗಳನ್ನು, ಮೇಲ್ಹೊದಿಕೆಗ
ಳನ್ನು, ಶಾಲುಗಳನ್ನು, ಕೈಚೀಲಗಳನ್ನು, 23ಕೈಗನ್ನಡಿಗ
ಳನ್ನು, ಪೋಷಾಕುಗಳನ್ನು, ಮುಂಡಾಸಗಳನ್ನು ಮತ್ತು
ಉದ್ದವಾದ ಶಾಲುಗಳನ್ನು ಅವರಿಂದ ತೆಗೆದುಬಿಡುವನು.
24ಆ ಸಮಯದಲ್ಲಿ ಸ್ತ್ರೀಯರ ಪರಿಮಳದ್ರವ್ಯವು ಕೊಳೆತ
ವಾಸನೆಯಿಂದ ಕೂಡಿರುವುದು. ಅವರು ಸೊಂಟಪಟ್ಟಿಯ
ಬದಲಿಗೆ ಹಗ್ಗ ಕಟ್ಟಿಕೊಳ್ಳುವರು; ತಲೆಗೂದಲನ್ನು ಅಂದ
ವಾಗಿ ಹೆಣೆದುಕೊಳ್ಳುವ ಬದಲು ಬೋಳಿಸಿಕೊಳ್ಳುವರು.
ಈಗ ಅವರಿಗೆ ಆಧುನಿಕ ವಸ್ತ್ರಗಳಿರುವವು; ಆದರೆ ಆಗ
ಅವರು ಶೋಕವಸ್ತ್ರಗಳನ್ನೇ ಧರಿಸುವರು. ಈಗ ಅವರು
ಮುಖಗಳಿಗೆ ಸೌಂದರ್ಯದ ಬೊಟ್ಟುಗಳನ್ನು ಇಟ್ಟು
ಕೊಳ್ಳುವರು; ಆದರೆ ಆಗ ಅವರ ಚರ್ಮದಲ್ಲಿ ಸುಟ್ಟ
ಕಲೆಗಳೇ ಇರುವವು.
25 ಆ ಸಮಯದಲ್ಲಿ ನಿಮ್ಮ ಗಂಡಸರೆಲ್ಲಾ ಖಡ್ಗದಿಂದ
ಹತರಾಗುವರು. ನಿಮ್ಮ ವೀರರೆಲ್ಲರೂ ಯುದ್ಧದಲ್ಲಿ

ಮಡಿಯುವರು. [26]ನಗರದ ಹೆಬ್ಬಾಗಿಲ ಬಳಿಯಲ್ಲಿ
ಜನರು ಸೇರಿಬರುವಾಗ ರೋಧನವೂ ಶೋಕವೂ ಇರು
ತ್ತವೆ. ಇದ್ದುದನ್ನೆಲ್ಲಾ ಕಳೆದುಕೊಂಡ ಸ್ತ್ರೀಯಂತೆ ಜೆರುಸ
ಲೇಮು ಸರ್ವವನ್ನೂ ಕಳೆದುಕೊಂಡು ನೆಲದ ಮೇಲೆ
ಕುಳಿತು ರೋಧಿಸುವಳು.

4 ಆ ಸಮಯದಲ್ಲಿ ಏಳು ಮಂದಿ ಹೆಂಗಸರು ಒಬ್ಬ
ಗಂಡಸನ್ನು ಹಿಡಿದುಕೊಂಡು, 'ನಮ್ಮ ಆಹಾರವನ್ನು
ನಾವೇ ಸಂಪಾದಿಸಿಕೊಳ್ಳುತ್ತೇವೆ. ನಮ್ಮ ಬಟ್ಟೆಬರೆಗಳನ್ನು
ನಾವೇ ಮಾಡಿಕೊಳ್ಳುತ್ತೇವೆ, ನಮ್ಮ ಕೆಲಸಗಳನ್ನೆಲ್ಲಾ
ನಾವೇ ಮಾಡಿಕೊಳ್ಳುತ್ತೇವೆ. ನೀನು ನಮ್ಮನ್ನು ಮದುವೆ
ಯಾಗು, ನಿನ್ನ ಹೆಸರನ್ನು ನಾವು ಇಟ್ಟುಕೊಳ್ಳುವಂತೆ
ಮಾಡು. ದಯಮಾಡಿ ನಮ್ಮ ನಾಚಿಕೆಯನ್ನು ನಮ್ಮಿಂದ
ತೊಲಗಿಸು'' ಎಂದು ಹೇಳುವರು.

[2]ಆ ಸಮಯದಲ್ಲಿ ದೇವರ ಸಸಿ (ಯೆಹೂದವು) ಬಹಳ
ಚಂದವಾಗಿಯೂ ದೊಡ್ಡದಾಗಿಯೂ ಇರುವುದು. ಆ
ಸಮಯದಲ್ಲಿ, ಚೀಯೋನಿನಲ್ಲಿ ಮತ್ತು ಜೆರುಸಲೇಮಿ
ನಲ್ಲಿ ಇನ್ನೂ ವಾಸಿಸುತ್ತಿರುವ ಜನರು ತಮ್ಮ ದೇಶದಲ್ಲಿ
ಬೆಳೆಯುವ ಫಲಗಳಿಗಾಗಿ ತುಂಬಾ ಹೆಚ್ಚಳಪಡುವರು.
[3]ಜೀವಬಾಧ್ಯರ ಪಟ್ಟಿಯಲ್ಲಿ ಹೆಸರು ಬರೆಯಲ್ಪಟ್ಟು
ಚೀಯೋನಿನಲ್ಲಿಯೂ ಜೆರುಸಲೇಮಿನಲ್ಲಿಯೂ ವಾಸಿಸು
ವವರು ಪರಿಶುದ್ಧರೆಂದು ಕರೆಯಲ್ಪಡುವರು. ಅವರೆ
ಲ್ಲರೂ ಅಲ್ಲಿಯೇ ನೆಲೆಸುವರು.

[4]ಚೀಯೋನಿನ ಸ್ತ್ರೀಯರ ಕಲ್ಮಷವನ್ನೂ ಯೆಹೋ
ವನು ತೊಳೆದುಬಿಡುವನು. ಆತನು ಜೆರುಸಲೇಮಿನ
ಮಧ್ಯದಲ್ಲಿರುವ ರಕ್ತವನ್ನು ತೊಳೆದು ಬಿಡುವನು. ಆತನು
ನ್ಯಾಯನೀತಿಗಳಿಂದ ತೀರ್ಪುನೀಡುವನು; ದಹಿಸುವ ಆತ್ಮ
ನಿಂದ ಎಲ್ಲವನ್ನು ಶುದ್ಧಗೊಳಿಸುವನು.

[5]ಆ ಸಮಯದಲ್ಲಿ ತಾನು ತನ್ನ ಜನರೊಂದಿಗೆ ಇರುವು
ದಾಗಿ ಹೀಗೆ ದೇವರು ರುಜುವಾತುಪಡಿಸುವನು. ಹಗ
ಲಲ್ಲಿ ದೇವರು ಧೂಮಮೇಘವನ್ನೂ ಇರುಳಲ್ಲಿ ಪ್ರಜ್ವಲಿ
ಸುವ ಅಗ್ನಿಯ ಪ್ರಕಾಶವನ್ನೂ ಉಂಟುಮಾಡುವನು. ಈ
ಗುರುತುಗಳು ಚೀಯೋನ್ ಪರ್ವತದ ಮೇಲಿರುವ ಪ್ರತಿ
ಯೊಂದು ಜನರ ಸಭೆಯ ಮೇಲೆ ಆಕಾಶದಲ್ಲಿ ಕಾಣು
ವುದು. ಪ್ರತಿಯೊಬ್ಬನ ಮೇಲೆಯೂ ಕಾಪಾಡಿಕೊಳ್ಳುವು
ದಕ್ಕಾಗಿ ಹೊದಿಕೆ ಇರುವುದು. [6]ಈ ಹೊದಿಕೆಯು ಸುರಕ್ಷಿತ
ಸ್ಥಳದಂತಿರುವದು. ಅದು ಸೂರ್ಯನ ಶಾಖದಿಂದ
ಅವರನ್ನು ರಕ್ಷಿಸುವದು. ಅದೇ ಸಮಯದಲ್ಲಿ ಸಣ್ಣ ದೊಡ್ಡ
ಮಳೆಗಳಿಂದಲೂ ಆ ಹೊದಿಕೆಯು ರಕ್ಷಿಸುವದು.

### ಇಸ್ರೇಲು ದೇವರ ವಿಶೇಷವಾದ ತೋಟ

5 ನನ್ನ ಪ್ರಿಯನನ್ನೂ ಆತನ ತೋಟವನ್ನೂ ಕುರಿತು
ಗೀತೆಯೊಂದನ್ನು ಹಾಡುವೆ.
ಫಲವತ್ತಾದ ಪ್ರದೇಶದಲ್ಲಿ ನನ್ನ ಪ್ರಿಯನಿಗೆ ದ್ರಾಕ್ಷಾ
ತೋಟವಿತ್ತು.

2 ಆತನು ಭೂಮಿಯನ್ನು ಅಗೆದು ಹಸನು ಮಾಡಿ
ದನು; ಅದರಲ್ಲಿ ಉತ್ತಮವಾದ ದ್ರಾಕ್ಷಿಯ ಸಸಿಗ
ಳನ್ನು ನೆಟ್ಟನು; ತೋಟದ ಮಧ್ಯದಲ್ಲಿ ಒಂದು
ಗೋಪುರವನ್ನು ಕಟ್ಟಿಸಿ ದ್ರಾಕ್ಷಿಯ ತೊಟ್ಟಿಯನ್ನು
ಮಾಡಿಸಿದನು. ತೋಟವು ಒಳ್ಳೆಯ ದ್ರಾಕ್ಷಿ ಹಣ್ಣನ್ನು
ಕೊಡುವುದೆಂದು ಎದುರು ನೋಡತೊಡಗಿದನು.
ಆದರೆ ಅದು ಹೊಲಸು ಹಣ್ಣನ್ನು ಬಿಟ್ಟಿತು.

3 ಆಗ ಆತನು, ''ಜೆರುಸಲೇಮಿನ ನಿವಾಸಿಗಳೇ,
ಯೆಹೂದದ ಜನರೇ, ನನ್ನ ವಿಚಾರವಾಗಿಯೂ
ನನ್ನ ದ್ರಾಕ್ಷಾತೋಟದ ವಿಚಾರವಾಗಿಯೂ
ಯೋಚಿಸಿರಿ.

4 ನನ್ನ ದ್ರಾಕ್ಷಾತೋಟಕ್ಕೆ ನಾನು ಇನ್ನೇನು ಮಾಡ
ಬೇಕಿತ್ತು. ನಾನು ಮಾಡಬೇಕಿದ್ದನ್ನೆಲ್ಲಾ ಮಾಡಿ
ದೆನು. ಒಳ್ಳೆಯ ದ್ರಾಕ್ಷಿಹಣ್ಣು ಬಿಡುವದೆಂದು ಆಶಿಸಿ
ದ್ದೆನು. ಆದರೆ ಅದು ಹೊಲಸು ದ್ರಾಕ್ಷಿಗಳನ್ನೇ
ಬಿಟ್ಟಿತು. ಹೀಗೆ ಆದದ್ದೇಕೆ?

[5]ನಾನೀಗ ನನ್ನ ದ್ರಾಕ್ಷಾತೋಟಕ್ಕೆ ಏನು ಮಾಡುವೆ
ನೆಂದು ತಿಳಿಸುವೆನು.

ಅದರ ಸುತ್ತಲೂ ರಕ್ಷಣೆಗಾಗಿ ಹಾಕಿದ್ದ ಮುಳ್ಳಿನ
ಬೇಲಿಯನ್ನು ಕಿತ್ತು ಸುಟ್ಟುಬಿಡುವೆನು. ಅದರ
ಕಲ್ಲಿನ ಗೋಡೆಯನ್ನು ಕೆಡವಿ ತುಳಿದಾಟಕ್ಕೆ ಈಡು
ಮಾಡುವೆನು.

6 ನಾನು ಅದನ್ನು ಬೆಂಗಾಡಾಗಿ ಮಾಡುವೆನು. ಅದರ
ಲ್ಲಿರುವ ಸಸಿಗಳನ್ನು ಯಾರೂ ಲಕ್ಷಿಸರು. ತೋಟ
ದಲ್ಲಿ ಯಾರೂ ಕೆಲಸ ಮಾಡುವದಿಲ್ಲ. ಮುಳ್ಳು
ಗಳೂ ಹಣಜಿಗಳೂ ಅಲ್ಲಿ ಬೆಳೆಯುವವು. ಅಲ್ಲಿ ಮಳೆ
ಗರೆಯದಂತೆ ಮೋಡಗಳಿಗೆ ಆಜ್ಞಾಪಿಸುವೆನು.''

[7]ಸರ್ವಶಕ್ತನಾದ ಯೆಹೋವನ ದ್ರಾಕ್ಷಾತೋಟವೇ
ಇಸ್ರೇಲ್ ದೇಶ. ಯೆಹೋವನು ಪ್ರೀತಿಸುವ ದ್ರಾಕ್ಷಾ
ಬಳ್ಳಿಯೇ ಯೆಹೂದದ ಪ್ರಜೆ.

ಯೆಹೋವನು ನ್ಯಾಯವನ್ನು ಅಪೇಕ್ಷಿಸಿದರೂ
ಸಿಕ್ಕಿದ್ದು ನರಹತ್ಯವೇ. ಯೆಹೋವನು
ಧರ್ಮವನ್ನು ಅಪೇಕ್ಷಿಸಿದರೂ ದೊರಕಿದ್ದು
ಗೋಳಾಟವೇ.

[8]ನೀವು ಒಬ್ಬರಿಗೊಬ್ಬರು ಸಮೀಪದಲ್ಲಿ ವಾಸಿಸುತ್ತೀರಿ.
ಬೇರೆ ಯಾವುದಕ್ಕೂ ಸ್ಥಳಸಿಗದಂತೆ ನೀವು ಹತ್ತಿರ

ಹತ್ತಿರವಾಗಿ ಮನೆಗಳನ್ನು ಕಟ್ಟಿಕೊಳ್ಳುತ್ತೀರಿ. ಆದರೆ
ಯೆಹೋವನು ನಿಮ್ಮನ್ನು ಶಿಕ್ಷಿಸಿ ಇಡೀ ದೇಶದಲ್ಲಿಯೇ
ನೀವು ಒಬ್ಬಂಟಿಗರಾಗಿ ವಾಸಿಸುವಂತೆ ಮಾಡುವನು.
9ಸರ್ವ ಶಕ್ತನಾದ ಯೆಹೋವನ ನುಡಿಗಳಿವು. ನಾನು ಈ
ಮಾತುಗಳನ್ನು ಕಿವಿಯಾರೆ ಕೇಳಿದೆನು: ‘‘ಈಗ ಅನೇಕ
ಮನೆಗಳಿವೆ, ಆದರೆ ನಾನು ಖಂಡಿತವಾಗಿ ಹೇಳುವುದೇ
ನೆಂದರೆ ಎಲ್ಲಾ ಮನೆಗಳು ಕೆಡವಲ್ಪಡುವವು. ಈಗ ಭವ್ಯ
ವಾದ ಬಂಗಲೆಗಳಿವೆ. ಆದರೆ ಅವುಗಳೆಲ್ಲಾ ಬರಿದಾಗು
ವವು. 10ಆ ದಿವಸಗಳಲ್ಲಿ ಹತ್ತು ಎಕರೆ ವಿಶಾಲವಾದ ದ್ರಾಕ್ಷಿ
ತೋಟದಲ್ಲಿ ಸ್ವಲ್ಪ ಮಾತ್ರವೇ ದ್ರಾಕ್ಷಾರಸವು ದೊರಕು
ವದು. ಅನೇಕ ಚೀಲ ಬೀಜವನ್ನು ಬಿತ್ತಿದರೆ ಸ್ವಲ್ಪ ಧಾನ್ಯ
ಮಾತ್ರ ಸಿಗುವುದು.’’

11ನೀವು ಮುಂಜಾನೆ ಎದ್ದು ಮದ್ಯಕ್ಕಾಗಿ ಹುಡುಕಾಡು
ವಿರಿ. ಮಧ್ಯರಾತ್ರಿಯವರೆಗೆ ಎಚ್ಚರವಿದ್ದು ಕುಡಿದು ಮತ್ತ
ರಾಗುವಿರಿ. 12ನೀವು ಕುಡಿಯುತ್ತಾ ಹಾರ್ಪ್‌ವಾದ್ಯ
ಗಳನ್ನೂ ದಮ್ಮಡಿಗಳನ್ನೂ ಕೊಳಲುಗಳನ್ನೂ ಬಾರಿಸುತ್ತಾ
ನೃತ್ಯಮಾಡುವಿರಿ. ಆದರೆ ಯೆಹೋವನು ಮಾಡಿದ
ಕಾರ್ಯಗಳನ್ನು ನೀವು ಗಮನಿಸುವುದಿಲ್ಲ. ಯೆಹೋವನ
ಹಸ್ತವು ಅನೇಕಾನೇಕ ಕಾರ್ಯಗಳನ್ನು ಮಾಡಿದೆ. ಆದರೆ
ನೀವು ಅವುಗಳನ್ನು ಲಕ್ಷಿಸುವುದಿಲ್ಲ. ಆದುದರಿಂದ ನಿಮಗೆ
ಕೇಡಾಗುವುದು.

13ಯೆಹೋವನು ಹೇಳುವುದೇನೆಂದರೆ: ‘‘ನನ್ನ ಜನರು
ಸೆರೆಹಿಡಿಯಲ್ಪಟ್ಟು ಒಯ್ಯಲ್ಪಡುವರು. ಯಾಕೆಂದರೆ
ಅವರು ನಿಜವಾಗಿಯೂ ನನ್ನನ್ನು ಅರಿತಿಲ್ಲ. ಇಸ್ರೇಲಿನಲ್ಲಿ
ವಾಸಿಸುವ ಕೆಲವು ಜನರು ಈಗ ಪ್ರಮುಖರಾಗಿದ್ದಾರೆ.
ತಮ್ಮ ಅನಾಯಾಸದ ಜೀವಿತದಲ್ಲಿ ಆನಂದಿಸುತ್ತಾರೆ.
ಆದರೆ ಆ ಗಣ್ಯವ್ಯಕ್ತಿಗಳೆಲ್ಲಾ ಬಾಯರಿಕೆಯಿಂದಲೂ
ಹಸಿವೆಯಿಂದಲೂ ನರಳುವರು. 14ಬಳಿಕ ಅವರು ಸತ್ತು
ಪಾತಾಳಕ್ಕೆ ಇಳಿದುಹೋಗುವರು. ಪಾತಾಳವು ತನ್ನ
ಬಾಯನ್ನು ಅಗಲವಾಗಿ ತೆರೆದು ಅವರನ್ನೆಲ್ಲಾ ನುಂಗಿ
ಬಿಡುವುದು.’’

15ಆ ಜನರು ತಗ್ಗಿಸಲ್ಪಡುವರು. ಆ ಗಣ್ಯವ್ಯಕ್ತಿಗಳು ತಮ್ಮ
ತಲೆಗಳನ್ನು ಕೆಳಗೆ ಮಾಡಿ ನೆಲದ ಕಡೆಗೆ ನೋಡುವರು.
16ಸರ್ವಶಕ್ತನಾದ ಯೆಹೋವನು ನೀತಿಯಿಂದ ನ್ಯಾಯ
ತೀರಿಸುವನು. ಯೆಹೋವನು ಉನ್ನತೋನ್ನತನೆಂದು ಜನ
ರೆಲ್ಲರೂ ಅರಿತುಕೊಳ್ಳುವರು. ಪರಿಶುದ್ಧನಾದ ದೇವರು
ನ್ಯಾಯವಾದದ್ದನ್ನೇ ಮಾಡುವನು. ಜನರು ಆತನನ್ನು
ಗೌರವಿಸುವರು. 17ಆತನು ಇಸ್ರೇಲ್ ದೇಶದ ಜನರನ್ನು
ದೇಶಭ್ರಷ್ಟರನ್ನಾಗಿ ಮಾಡುವನು. ಆಗ ದೇಶವು ಬರಿ
ದಾಗುವುದು. ಕುರಿಗಳು ತಮ್ಮ ಮನಸ್ಸು ಬಂದೆಡೆಗೆ
ಹೋಗುವವು. ಐಶ್ವರ್ಯವಂತರಿಗೆ ಸೇರಿದ್ದ ಜಮೀನಿನ
ಮೇಲೆ ಕುರಿಮರಿಗಳು ನಡೆದಾಡುವವು.

18ಆ ಜನರನ್ನು ನೋಡಿರಿ. ಜನರು ಹಗ್ಗಗಳಿಂದ ಗಾಡಿ
ಯನ್ನು ಎಳೆದುಕೊಂಡು ಹೋಗುವಂತೆ ಅವರು ತಮ್ಮ
ಪಾಪಗಳನ್ನು ಎಳೆದುಕೊಂಡು ಹೋಗುತ್ತಿದ್ದಾರೆ.
19‘‘ದೇವರು ತಾನು ಮಾಡಲಿಕ್ಕಿರುವುದನ್ನು ಬೇಗನೇ
ಮಾಡಿಮುಗಿಸಲಿ. ಆಗ ಏನಾಗುವದೋ ನೋಡೋಣ.
ಆತನ ಯೋಜನೆ ಬೇಗನೆ ಕಾರ್ಯರೂಪಕ್ಕೆ ಬರಲಿ. ಆಗ
ಆತನ ಯೋಜನೆ ಏನೆಂಬುದು ನಮಗೆ ತಿಳಿಯುವುದು’’
ಎಂದು ಅವರು ಹೇಳುತ್ತಿದ್ದಾರೆ.

20ಆ ಜನರು ಒಳ್ಳೆಯವುಗಳನ್ನು ಕೆಟ್ಟವುಗಳೆಂದೂ
ಕೆಟ್ಟವುಗಳನ್ನು ಒಳ್ಳೆಯವುಗಳೆಂದೂ ಹೇಳುತ್ತಾರೆ. ಅವರು
ಬೆಳಕನ್ನು ಕತ್ತಲೆಯೆಂದೂ ಕತ್ತಲೆಯನ್ನು ಬೆಳಕೆಂದೂ
ಅನ್ನುತ್ತಾರೆ. ಅವರು ಸಿಹಿಯನ್ನು ಕಹಿಯೆಂದೂ ಕಹಿ
ಯನ್ನು ಸಿಹಿಯೆಂದೂ ಹೇಳುವರು. 21ಅವರು ತಾವು
ತುಂಬಾ ಬುದ್ಧಿವಂತರೆಂದೂ, ಜ್ಞಾನಿಗಳೆಂದೂ ಹೇಳಿ
ಕೊಳ್ಳುವರು. 22ಅವರು ಮದ್ಯವನ್ನು ಬೆರೆಸುವದರಲ್ಲಿ
ಪರಿಣಿತರು; ಮದ್ಯಸೇವನೆ ಮಾಡುವದಕ್ಕೆ ಹೆಸರಾದವರು.
23ಅವರಿಗೆ ಹಣ ಕೊಟ್ಟರೆ, ಅಪರಾಧಿಯನ್ನೂ ಬಿಟ್ಟು
ಬಿಡುವರು; ಆದರೆ ಒಳ್ಳೆಯವರಿಗೆ ಸರಿಯಾದ ನ್ಯಾಯ
ತೀರ್ಪು ದೊರಕಲು ಅವರು ಅವಕಾಶ ಕೊಡುವುದಿಲ್ಲ.
24ಆದ್ದರಿಂದ ಅವರಿಗೆ ಕೇಡುಗಳಾಗುವವು. ಅವರ ಸಂತತಿ
ಯವರು ತರಗೆಲೆಯೂ ಹುಲ್ಲೂ ಬೆಂಕಿಯಲ್ಲಿ ಸುಟ್ಟು
ನಾಶವಾಗುವಂತೆ ನಾಶವಾಗುವರು. ಅವರ ಸಂತತಿ
ಯವರು ಸತ್ತು ಧೂಳಾಗುವ ಬೇರಿನಂತೆ ನಾಶವಾಗು
ವರು. ಬೆಂಕಿಯಲ್ಲಿ ಸುಟ್ಟುಹೋದ ಹೂವಿನ ಬೂದಿಯು
ಗಾಳಿಯಲ್ಲಿ ಹಾರಿಹೋಗುವಂತೆ ಅವರ ಸಂತತಿಯವರು
ನಾಶವಾಗುವರು.

ಅವರು ಸರ್ವಶಕ್ತನಾದ ಯೆಹೋವನ ಬೋಧನೆಗ
ಳನ್ನು ಅನುಸರಿಸಲು ನಿರಾಕರಿಸಿದ್ದಾರೆ. ಇಸ್ರೇಲಿನ ಪರಿ
ಶುದ್ಧನ ಸಂದೇಶವನ್ನು ಅವರು ದ್ವೇಷಿಸುತ್ತಾರೆ. 25ಆದುದ
ರಿಂದ ಯೆಹೋವನು ತನ್ನ ಜನರ ಮೇಲೆ ಬಹಳವಾಗಿ
ಕೋಪಗೊಂಡಿದ್ದಾನೆ. ಯೆಹೋವನು ತನ್ನ ಕೈಗಳನ್ನೆತ್ತಿ
ಅವರನ್ನು ಶಿಕ್ಷಿಸುವನು. ಆಗ ಪರ್ವತಗಳೂ ಹೆದರಿಕೊಳ್ಳು
ವವು; ಹೆಣಗಳು ಕಸದಂತೆ ರಸ್ತೆಗಳಲ್ಲಿ ಬಿದ್ದುಕೊಂಡಿ
ರುವವು. ಆದರೆ ದೇವರು ಅವರ ಮೇಲೆ ಕೋಪಿಸಿ
ಕೊಂಡೇ ಇರುವನು. ಜನರನ್ನು ಶಿಕ್ಷಿಸಲು ಆತನ ಕೈಗಳು
ಮೇಲೆತ್ತಲ್ಪಟ್ಟಿರುವವು.

### ಇಸ್ರೇಲರನ್ನು ಶಿಕ್ಷಿಸಲು ದೇವರು ಸೈನ್ಯವನ್ನು ತರುವನು

26ಎದ್ದು ನೋಡು! ದೂರದೇಶದ ಜನಾಂಗಗಳಿಗೆ
ದೇವರು ಗುರುತನ್ನು ಕೊಡುತ್ತಿದ್ದಾನೆ. ಆತನು ಧ್ವಜವನ್ನೆತ್ತಿ
ಆ ಜನರನ್ನು ಸಿಳ್ಳುಹಾಕಿ ಕರೆಯುತ್ತಿದ್ದಾನೆ. ಶತ್ರುಗಳು
ದೂರದೇಶದಿಂದ ಬರುತ್ತಿದ್ದಾರೆ. ಅವರು ಬೇಗನೆ ನಿನ್ನ

ದೇಶವನ್ನು ಪ್ರವೇಶಿಸುವರು. ಅವರು ಬಹು ವೇಗವಾಗಿ
ಬರುತ್ತಿದ್ದಾರೆ. 27ಶತ್ರುಗಳು ಆಯಾಸಗೊಳ್ಳುವುದಿಲ್ಲ,
ನೆಲಕ್ಕೆ ಬೀಳುವುದಿಲ್ಲ. ಅವರು ತೂಕಡಿಸುವುದಿಲ್ಲ, ನಿದ್ರೆ
ಮಾಡುವುದಿಲ್ಲ. ಅವರ ಸೊಂಟಪಟ್ಟಿಯು ಆಯುಧ
ದೊಂದಿಗೆ ಯಾವಾಗಲೂ ಸಿದ್ಧವಾಗಿರುವುದು. ಅವರ
ಪಾದರಕ್ಷೆಗಳ ದಾರವು ಎಂದಿಗೂ ತುಂಡಾಗುವದಿಲ್ಲ.
28ವೈರಿಗಳ ಬಾಣಗಳು ಬಹು ಹರಿತವಾದದ್ದು. ಅವರ
ಬಿಲ್ಲುಗಳೆಲ್ಲವೂ ಬಾಣವೆಸೆಯಲು ತಯಾರಾಗಿವೆ. ಅವರ
ಕುದುರೆಗಳ ಪಾದಗಳು ಬಂಡೆಯಂತೆ ಗಟ್ಟಿಯಾಗಿವೆ.
ಅವರ ರಥಗಳ ಹಿಂದಿನಿಂದ ಧೂಳಿನ ಮೋಡವೇ
ಹಾರುವದು.

29ಶತ್ರುಗಳು ಆರ್ಭಟಿಸುವರು, ಆ ಆರ್ಭಟವು
ಪ್ರಾಯದ ಸಿಂಹಗಳ ಗರ್ಜನೆಯಂತಿರುವುದು. ಶತ್ರುಗಳು
ಹೂಂಕರಿಸುತ್ತಾ ತಮ್ಮೊಂದಿಗೆ ಯುದ್ಧ ಮಾಡುತ್ತಿರುವವ
ರನ್ನು ಹಿಡಿದುಬಿಡುವರು. ಜನರು ಹೋರಾಡಿ ಪಾರಾ
ಗಲು ಪ್ರಯತ್ನಿಸುವರು. ಆದರೆ ಅವರನ್ನು ರಕ್ಷಿಸುವವರು
ಯಾರೂ ಇರುವುದಿಲ್ಲ.

30ಆದುದರಿಂದ ಸಿಂಹವು ಸಮುದ್ರದಂತೆ ಗರ್ಜಿಸು
ವದು. ಸೆರೆಹಿಡಿಯಲ್ಪಟ್ಟ ಜನರು ನೆಲದ ಕಡೆ ನೋಡು
ವರು. ಅಲ್ಲಿ ಬರೇ ಕತ್ತಲೆಯೇ. ಆ ದಟ್ಟವಾದ ಮೋಡಗ
ಳಲ್ಲಿ ಎಲ್ಲವೂ ಕಪ್ಪಾಗಿಯೇ ಕಾಣುತ್ತದೆ.

## ಪ್ರವಾದಿಯಾಗಲು ಯೆಶಾಯನಿಗೆ ದೇವರಿಂದ ಕರೆ

6 ಅರಸನಾದ ಉಜ್ಜೀಯನು ಮರಣ ಹೊಂದಿದ
ವರುಷದಲ್ಲಿ ನಾನು ನನ್ನ ಒಡೆಯನನ್ನು ಕಂಡೆನು.
ಆತನು ಅದ್ಭುತವೂ ಉನ್ನತವೂ ಆಗಿರುವ ಸಿಂಹಾಸನದ
ಮೇಲೆ ಕುಳಿತಿದ್ದನು. ಆತನ ಉದ್ದವಾದ ನಿಲುವಂಗಿಯು
ಆಲಯವನ್ನು ತುಂಬಿಕೊಂಡಿತ್ತು. 2ಆರು ರೆಕ್ಕೆಗಳುಳ್ಳ
ಸೆರಾಫಿಯರು ಯೆಹೋವನ ಸುತ್ತಲೂ ನಿಂತಿದ್ದರು. ಆ
ದೇವದೂತರು ಎರಡು ರೆಕ್ಕೆಗಳಿಂದ ತಮ್ಮ ಮುಖಗಳನ್ನು
ಮುಚ್ಚಿಕೊಂಡಿದ್ದರು; ಎರಡು ರೆಕ್ಕೆಗಳಿಂದ ತಮ್ಮ ಕಾಲು
ಗಳನ್ನು ಮುಚ್ಚಿಕೊಂಡಿದ್ದರು; ಉಳಿದ ಎರಡು ರೆಕ್ಕೆಗ
ಳಿಂದ ಹಾರಾಡುತ್ತಿದ್ದರು. 3ಪ್ರತಿಯೊಬ್ಬ ದೂತನು
ಇನ್ನೊಬ್ಬ ದೂತನನ್ನು ಕರೆದು, ''ಪರಿಶುದ್ಧನು, ಪರಿಶು
ದ್ಧನು, ಪರಿಶುದ್ಧನು, ಸರ್ವಶಕ್ತನಾದ ಯೆಹೋವನು
ಮಹಾ ಪರಿಶುದ್ಧನು. ಆತನ ಮಹಿಮೆಯು ಇಡೀ
ಭೂಮಂಡಲವನ್ನು ಆವರಿಸಿಕೊಳ್ಳುವುದು'' ಎಂದು ಗಟ್ಟಿ
ಯಾದ ಸ್ವರದಲ್ಲಿ ಹೇಳುತ್ತಿದ್ದರು. 4ಅವರ ಗಟ್ಟಿಯಾದ
ಸ್ವರಕ್ಕೆ ಬಾಗಿಲಿನ ನಿಲುವುಗಳು ಅಲುಗಾಡುತ್ತಿದ್ದವು;
ಆಲಯವು ಹೊಗೆಯಿಂದ ತುಂಬಿಹೋಯಿತು.

5ಆಗ ನಾನು ಬಹು ಭಯಗೊಂಡು, ''ಅಯ್ಯೋ,
ನಾನು ನಾಶವಾಗುತ್ತಿದ್ದೇನೆ. ನಾನು ದೇವರೊಂದಿಗೆ
ಮಾತನಾಡುವಷ್ಟು ಯೋಗ್ಯನಲ್ಲ. ದೇವರೊಂದಿಗೆ
ಮಾತಾಡಲು ಯೋಗ್ಯರಲ್ಲದ ಜನರೊಂದಿಗೆ ನಾನು
ಜೀವಿಸುತ್ತಿದ್ದೇನೆ. ಆದರೂ ನಾನು ಸರ್ವಶಕ್ತನಾದ ಅರಸ
ನನ್ನು ನೋಡಿದೆನು'' ಎಂದೆನು.

6ಯಜ್ಞವೇದಿಕೆಯ ಮೇಲೆ ಬೆಂಕಿ ಇತ್ತು. ಸೆರಾಫಿಯರ
ಲ್ಲೊಬ್ಬನು ಇಕ್ಕುಳಿಯಿಂದ ಬೆಂಕಿಯೊಳಗಿಂದ ಉರಿ
ಯುವ ಕೆಂಡವನ್ನು ತೆಗೆದು ನನ್ನ ಬಳಿಗೆ ಹಾರಿಬಂದನು.
7ಆ ಸೆರಾಫಿಯನು ಉರಿಯುವ ಕೆಂಡವನ್ನು ನನ್ನ ಬಾಯ
ಮೇಲಿಟ್ಟನು. ಆಗ ಆ ದೂತನು, ''ಇಗೋ, ಈ ಉರಿ
ಯುವ ಕೆಂಡವು ನಿನ್ನ ತುಟಿಗಳಿಗೆ ತಗಲಿದ್ದರಿಂದ ನೀನು
ಮಾಡಿದ ಕೆಟ್ಟಕಾರ್ಯಗಳೆಲ್ಲಾ ನಿನ್ನಿಂದ ತೊಲಗಿ
ಹೋದವು. ಈಗ ನಿನ್ನ ಪಾಪವು ಅಳಿಸಿಹಾಕಲ್ಪಟ್ಟಿದೆ*''
ಎಂದು ಹೇಳಿದನು.

8ಆಗ ನಾನು ನನ್ನ ಒಡೆಯನಾದ ಯೆಹೋವನ ಸ್ವರ
ವನ್ನು ಕೇಳಿದೆನು. ಆತನು, ''ನಾನು ಯಾರನ್ನು ಕಳುಹಿ
ಸಲಿ? ನಮಗೋಸ್ಕರ ಯಾರು ಹೋಗುವರು?'' ಎಂದು
ಕೇಳಿದನು.

ಆಗ ನಾನು, ''ನಾನಿದ್ದೇನೆ, ನನ್ನನ್ನು ಕಳುಹಿಸು'' ಎಂದು
ಹೇಳಿದೆನು.

9ಆಗ ಯೆಹೋವನು, ''ನೀನು ಹೋಗಿ ಇದನ್ನು ಜನ
ರಿಗೆ ಸಾರು: 'ಸರಿಯಾಗಿ ಕೇಳಿಸಿಕೊಳ್ಳಿ, ಆದರೆ ಅರ್ಥ
ಮಾಡಿಕೊಳ್ಳಬೇಡಿ. ಸೂಕ್ಷ್ಮವಾಗಿ ನೋಡಿ, ಆದರೆ
ಕಲಿತುಕೊಳ್ಳಬೇಡಿ.' 10ಜನರಲ್ಲಿ ಗಲಿಬಿಲಿಯನ್ನು
ಉಂಟುಮಾಡು. ಜನರು ತಾವು ನೋಡಿದ್ದನ್ನು ಕೇಳಿ
ದ್ದನ್ನು ಅರ್ಥಮಾಡಿಕೊಳ್ಳದ ಹಾಗೆ ಮಾಡು. ನೀನು ಹೀಗೆ
ಮಾಡದಿದ್ದಲ್ಲಿ ಜನರು ತಾವು ಕೇಳಿದ್ದನ್ನು ಅರ್ಥಮಾಡಿ
ಕೊಳ್ಳುವರು; ಜನರು ತಮ್ಮ ಮನಸ್ಸಿನಲ್ಲಿ ಅರ್ಥಮಾಡಿ
ಕೊಳ್ಳುವರು. ಅವರು ಹಾಗೆ ಮಾಡಿದ್ದಲ್ಲಿ, ಅವರು ನನ್ನ
ಬಳಿಗೆ ಹಿಂದಿರುಗಿ ಬಂದು ಗುಣ ಹೊಂದುವರು'' ಎಂದು
ಹೇಳಿದನು.

11ಆಗ ನಾನು, ''ಒಡೆಯನೇ, ಎಷ್ಟರ ತನಕ ನಾನು
ಹೀಗೆ ಮಾಡಬೇಕು?'' ಎಂದು ವಿಚಾರಿಸಿದೆನು. ಅದಕ್ಕೆ
ಯೆಹೋವನು, ''ನಗರಗಳು ನಾಶವಾಗುವ ತನಕ
ಹೀಗೆಯೇ ಮಾಡು. ಮನೆಗಳಲ್ಲಿ ಜನರು ಇಲ್ಲದೆ ಹೋಗು
ವವರೆಗೆ ಹೀಗೆಯೇ ಮಾಡು. ಇಡೀ ದೇಶವು ಹಾಳಾಗಿ
ಬೆಂಗಾಡಾಗುವ ತನಕ ಹೀಗೆಯೇ ಮಾಡುತ್ತಿರು'' ಎಂದು
ಹೇಳಿದನು.

12ಜನರು ಬಹುದೂರ ಹೋಗುವಂತೆ ಯೆಹೋವನು
ಮಾಡುವನು. ದೇಶದೊಳಗೆ ನಿರ್ಜನವಾದ ಸ್ಥಳಗಳು
ಬೇಕಾದಷ್ಟು ಇರುವವು. 13ಆದರೆ ದೇಶದಲ್ಲಿ ಹತ್ತನೆ

---

**ಅಳಿಸಿಹಾಕಲ್ಪಟ್ಟಿದೆ** ಅಕ್ಷರಶಃ ''ಪ್ರಾಯಶ್ಚಿತ್ತ ಮಾಡಲಾಗಿದೆ.''

ಒಂದು ಭಾಗದಷ್ಟು ಜನರು ಮಾತ್ರ ಉಳಿಯುವರು.
ಇವರು ನಾಶವಾಗುವುದಿಲ್ಲ. ಯಾಕೆಂದರೆ ಇವರು
ಯೆಹೋವನ ಬಳಿಗೆ ಹಿಂತಿರುಗಿ ಬಂದವರು. ಇವರು
ಓಕ್ ಮರದಂತಿರುವರು. ಆ ಮರವು ಕಡಿಯಲ್ಪಟ್ಟರೂ
ಅದರ ಬುಡವು ಹಾಗೆಯೇ ಉಳಿಯುವದು. ಈ
ಕಾಂಡದ ಬುಡವು ಬಹು ವಿಶೇಷವಾದ ಬೀಜ
ವಾಗಿರುವದು.

### ಅರಾಮ್ಯರೊಂದಿಗೆ ವೈಮನಸ್ಸು

7 ಆಹಾಜನು ಯೋಥಾಮನ ಮಗನು. ಯೋಥಾ
ಮನು ಉಜ್ಜೀಯನ ಮಗನು. ರೆಚೀನ್ ಎಂಬವನು
ಅರಾಮ್ಯರ ಅರಸನಾಗಿದ್ದನು. ರೆಮಲ್ಯನ ಮಗನಾದ
ಪೆಕಹನು ಇಸ್ರೇಲಿನ ಅರಸನಾಗಿದ್ದನು. ಆಗ ಆಹಾಜನು
ಯೆಹೂದದ ಅರಸನಾಗಿದ್ದನು. ರೆಚೀನ್ ಮತ್ತು ಪೆಕಹ
ಇವರಿಬ್ಬರೂ ಜೆರುಸಲೇಮಿಗೆ ವಿರುದ್ಧವಾಗಿ ಯುದ್ಧಕ್ಕೆ
ಹೊರಟರು. ಆದರೆ ಆ ನಗರವನ್ನು ಸೋಲಿಸಲು
ಅವರಿಂದಾಗಲಿಲ್ಲ.
2 ದಾವೀದನ ವಂಶದವರಿಗೆ ಒಂದು ಸಂದೇಶವು ಕಳುಹಿ
ಸಲ್ಪಟ್ಟಿತು, ‘‘ಅರಾಮ್ಯರ ಸೈನ್ಯ ಮತ್ತು ಎಫ್ರಾಯೀಮ್ಯರ
ಸೈನ್ಯ (ಇಸ್ರೇಲ್) ಒಟ್ಟಾಗಿ ಶಿಬಿರ ಹೂಡಿದ್ದಾರೆ’’
ಎಂಬುದೇ ಆ ಸಂದೇಶ.

ಅರಸನಾದ ಆಹಾಜನು ಈ ಸಂದೇಶವನ್ನು ಕೇಳಿದಾಗ,
ಅವನೂ ಅವನ ಜನರೂ ಬಹಳವಾಗಿ ಭಯ ಹಿಡಿದವ
ರಾದರು. ಅಡವಿಯ ಮರಗಳು ಬಿರುಗಾಳಿಗೆ ತತ್ತರಿಸು
ತ್ತವೊ ಎಂಬಂತೆ ಅವರು ತತ್ತರಿಸಿದರು.
3 ಆಗ ಯೆಹೋವನು ಯೆಶಾಯನಿಗೆ, ‘‘ನೀನೂ ನಿನ್ನ
ಮಗನಾದ ಶೆಯಾರ್ ಯಾಶೂಬನೂ ಆಹಾಜನ ಬಳಿಗೆ
ಹೋಗಿ ಮಾತನಾಡಬೇಕು. ನೀರು ಮೇಲಿನ ಕೊಳಕ್ಕೆ
ಸೇರುವ ಸ್ಥಳಕ್ಕೆ ಹೋಗು. ಇದು ಅಗಸನ ಹೊಲಕ್ಕೆ
ಹೋಗುವ ಮಾರ್ಗದಲ್ಲಿದೆ.
4 ಆಹಾಜನಿಗೆ ಹೀಗೆ ಹೇಳು: ‘ಶಾಂತನಾಗಿದ್ದು ಜಾಗ್ರ
ತೆಯಿಂದಿರು. ಭಯಪಡಬೇಡ. ರೆಚೀನ್ ಮತ್ತು
ರೆಮಲ್ಯನ ಮಗ ಇವರಿಬ್ಬರೂ ಸೇರಿ ನಿನ್ನನ್ನು ಬೆದರಿಸ
ದಂತೆ ನೋಡಿಕೋ. ಅವರಿಬ್ಬರೂ ಸುಟ್ಟುಹೋದ
ಕೋಲಿನಂತಿದ್ದಾರೆ. ಹಿಂದೆ ಅವರು ಬೆಂಕಿಯಿಂದ ಉರಿ
ಯುತ್ತಿದ್ದರು. ಆದರೆ ಈಗ ಅವರು ಕೇವಲ ಹೊಗೆಯಾ
ಡುತ್ತಿದ್ದಾರೆ. ರೆಚೀನ್, ಅರಾಮ್ಯ ಮತ್ತು ರೆಮಲ್ಯನ ಮಗ
ಕೋಪಗೊಂಡಿದ್ದಾರೆ. 5 ಅವರು ನಿನ್ನ ವಿರುದ್ಧವಾಗಿ
ಕುತಂತ್ರ ನಡಿಸಿದ್ದಾರೆ. 6 ನಾವು ಹೋಗಿ ಯೆಹೂದಕ್ಕೆ
ವಿರುದ್ಧವಾಗಿ ಯುದ್ಧ ಮಾಡೋಣ. ಯೆಹೂದ ರಾಜ್ಯ
ವನ್ನು ನಾವಿಬ್ಬರೂ ಭಾಗ ಮಾಡಿಕೊಳ್ಳೋಣ ಮತ್ತು
ಟಾಬೇಲನ ಮಗನನ್ನು ಯೆಹೂದದ ಹೊಸ ಅರಸನಾಗಿ
ಮಾಡೋಣ ಎಂದು ಮಾತಾಡಿಕೊಳ್ಳುತ್ತಿದ್ದಾರೆ.’’’
7 ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ‘‘ಅವರ ಕುತಂತ್ರವು ನಡೆಯದು. ಅದು ನೆರ
ವೇರದು. 8 ದಮಸ್ಕದಲ್ಲಿ ರೆಚೀನನು ಅರಸನಾಗಿರುವಷ್ಟು
ಸಮಯ ಅದು ನಡೆಯದು. ಎಫ್ರಾಯೀಮ್
(ಇಸ್ರೇಲ್) ಈಗ ಒಂದು ದೇಶವಾಗಿದೆ. ಆದರೆ ಇನ್ನು
ಅರವತ್ತೈದು ವರ್ಷಗಳೊಳಗೆ ಎಫ್ರಾಯೀಮ್ ಒಂದು
ದೇಶವಾಗಿರದು. 9 ಸಮಾರ್ಯವು ಎಫ್ರಾಯೀಮಿನ ರಾಜ
ಧಾನಿಯಾಗಿರುವಷ್ಟು ಕಾಲ ಮತ್ತು ರೆಮಲ್ಯನ ಮಗನು
ಸಮಾರ್ಯದಲ್ಲಿ ಅರಸನಾಗಿರುವಷ್ಟು ಕಾಲ ಅವರ
ಯೋಜನೆಗಳು ಕೈಗೂಡುವುದಿಲ್ಲ. ನೀನು ಈ ವಾರ್ತೆ
ಯನ್ನು ನಂಬದಿದ್ದರೆ ಜನರು ನಿನ್ನ ಮಾತನ್ನು
ನಂಬದಿರಲಿ.’’

### ಇಮ್ಮಾನುವೇಲ್: ದೇವರು ನಮ್ಮೊಂದಿಗಿದ್ದಾನೆ

10 ಬಳಿಕ ಯೆಹೋವನು ಆಹಾಜನೊಡನೆ ಮಾತನ್ನು
ಮುಂದುವರಿಸಿದನು. 11 ಯೆಹೋವನು ಹೇಳಿದ್ದೇ
ನೆಂದರೆ, ‘‘ಇವೆಲ್ಲಾ ಸತ್ಯವೆಂದು ಮನದಟ್ಟು ಮಾಡಿ
ಕೊಳ್ಳಲು ಒಂದು ಗುರುತನ್ನು ಕೇಳಿಕೊ. ನಿನಗೆ ಯಾವ
ಗುರುತನ್ನು ಬೇಕಾದರೂ ಕೇಳಿಕೊ. ಆ ಗುರುತು ಆಳ
ವಾದ ನರಕದಿಂದ ಬಂದ ಗುರುತಾದರೂ ಸರಿಯೇ
ಅಥವಾ ಉನ್ನತವಾದ ಆಕಾಶದಿಂದ ಬಂದ ಗುರುತಾ
ದರೂ ಸರಿಯೇ, ನಿನಗೆ ದಯಪಾಲಿಸುವೆನು’’ ಎಂದು
ಹೇಳಿದನು.
12 ಅದಕ್ಕೆ ಆಹಾಜನು, ‘‘ಇದು ಸತ್ಯವೆಂಬುದಕ್ಕೆ ನಾನು
ಯಾವ ಗುರುತನ್ನೂ ಕೇಳಲಾರೆ. ನಾನು ಯೆಹೋವನನ್ನು
ಪರೀಕ್ಷಿಸುವುದಿಲ್ಲ’’ ಎಂದು ಹೇಳಿದನು.
13 ಆಗ ಯೆಶಾಯನು ಹೇಳಿದ್ದೇನೆಂದರೆ, ‘‘ದಾವೀದನ
ಸಂತತಿಯವರೇ, ಕಿವಿಗೊಟ್ಟು ಕೇಳಿರಿ. ನೀವು ಜನರ ತಾಳ್ಮೆ
ಯನ್ನು ಪರೀಕ್ಷಿಸುತ್ತೀರಿ. ಆದರೆ ಅದು ನಿಮಗೆ ದೊಡ್ಡ
ವಿಷಯವಲ್ಲ. ಆದರೆ ಈಗ ನೀವು ನನ್ನ ದೇವರ ತಾಳ್ಮೆ
ಯನ್ನು ಪರೀಕ್ಷಿಸುತ್ತಿದ್ದೀರಿ. 14 ನನ್ನ ಒಡೆಯನಾದ
ದೇವರು ನಿಮಗೊಂದು ಗುರುತನ್ನು ಕೊಡುವನು:

ಇಗೋ, ಒಬ್ಬ ಕನ್ನಿಕೆಯು ಗರ್ಭಿಣಿಯಾಗಿ ಮಗ
ನಿಗೆ ಜನ್ಮನೀಡುವಳು. ಆತನಿಗೆ ಇಮ್ಮಾನುವೇಲ್
ಎಂದು ಹೆಸರಿಡುವಳು.

15 ಆತನು ಒಳ್ಳೆಯದನ್ನು ಆರಿಸಿಕೊಳ್ಳಲು ಮತ್ತು ಕೆಟ್ಟ
ದ್ದನ್ನು ನಿರಾಕರಿಸಲು ಕಲಿತುಕೊಳ್ಳುವವರೆಗೆ ಮೊಸ
ರನ್ನೂ ಜೇನುತುಪ್ಪವನ್ನೂ ತಿನ್ನುವನು.

16 ಆ ಮಗುವು ಒಳ್ಳೆಯದರ ಬಗ್ಗೆ ಮತ್ತು ಕೆಟ್ಟದ್ದರ
ಬಗ್ಗೆ ಕಲಿತುಕೊಳ್ಳುವಷ್ಟು ವಯಸ್ಸಾಗುವ ಮೊದಲೇ
ಎಫ್ರಾಯೀಮ್ ದೇಶ ಮತ್ತು ಅರಾಮ್ಯರ ದೇಶ
ನಿರ್ಜನವಾಗುವುದು.

‘‘ನೀವೀಗ, ಆ ಇಬ್ಬರು ಅರಸರಿಗೆ ಭಯಪಡುತ್ತಿದ್ದೀರಿ.
17ಆದರೆ ನೀವು ಯೆಹೋವನಿಗೆ ಭಯಪಡುವವರಾಗಿರ
ಬೇಕು. ಯಾಕೆಂದರೆ ಆತನು ನಿಮಗೆ ಸಂಕಟದ
ಕಾಲವನ್ನು ತಂದೊಡ್ಡುವನು. ಆ ಸಂಕಟವು ನಿಮ್ಮ
ಜನಗಳಿಗೂ ನಿಮ್ಮ ಪೂರ್ವಿಕರ ಕುಟುಂಬಕ್ಕೂ
ಬರುವದು. ದೇವರು ಏನು ಮಾಡುವನು? ಆತನು
ಅಶ್ಶೂರದ ರಾಜನನ್ನು ನಿಮಗೆ ವಿರುದ್ಧವಾಗಿ ಯುದ್ಧಕ್ಕೆ
ಬರಮಾಡುವನು.
18‘‘ಆ ಸಮಯದಲ್ಲಿ ಯೆಹೋವನು ನೊಣಗಳನ್ನು
ಕರೆಯುವನು. ಆ ನೊಣಗಳು ಈಗ ಈಜಿಪ್ಟಿನ ಹಳ್ಳದ
ಸಮೀಪದಲ್ಲಿವೆ. ಯೆಹೋವನು ದುಂಬಿಗಳನ್ನು ಕರೆಯು
ವನು. ಆ ದುಂಬಿಗಳು ಈಗ ಅಶ್ಶೂರ್ ದೇಶದಲ್ಲಿವೆ. ಈ
ವೈರಿಗಳು ನಿಮ್ಮ ದೇಶಕ್ಕೆ ಬಂದು 19 ಮರುಭೂಮಿಯ
ಹಳ್ಳಗಳ ಸಮೀಪದಲ್ಲಿರುವ ಬಂಡೆಯ ಸಂದುಗಳ
ಲ್ಲಿಯೂ ನೀರಿನ ಬಾವಿಗಳ ಬಳಿಯಲ್ಲಿರುವ ಪೊದೆಗ
ಳಲ್ಲಿಯೂ ಶಿಬಿರ ಹಾಕಿಕೊಳ್ಳುವರು. 20ಯೆಹೋವನು
ಅಶ್ಶೂರದವರ ಮೂಲಕ ಯೆಹೂದವನ್ನು ಶಿಕ್ಷಿಸುವನು.
ಆತನು ಅಶ್ಶೂರವನ್ನು ಬಾಡಿಗೆಗೆ ತೆಗೆದುಕೊಂಡ ಕ್ಷೌರಿ
ಕನ ಕತ್ತಿಯಂತೆ ತೆಗೆದುಕೊಂಡು ಯೆಹೂದದ ತಲೆ
ಕೂದಲನ್ನೂ ಕೈಕಾಲುಗಳ ರೋಮವನ್ನೂ ಗಡ್ಡವನ್ನು
ಬೋಳಿಸಿ ಬಿಡುವನು.
21‘‘ಆ ಕಾಲದಲ್ಲಿ ಯಾವನೇ ಆಗಲಿ ಹಸುವನ್ನೂ
ಎರಡು ಕುರಿಗಳನ್ನೂ ಸಾಕಿ, 22ಅವು ಕರೆಯುವ ಹಾಲಿ
ನಿಂದ ಮೊಸರನ್ನು ತಿನ್ನುವನು; ದೇಶದಲ್ಲಿರುವ ಪ್ರತಿ
ಯೊಬ್ಬನೂ ಮೊಸರನ್ನೂ ಜೇನುತುಪ್ಪವನ್ನೂ ತಿಂದು
ಜೀವಿಸುವನು. 23ಒಂದುಸಾವಿರ ದ್ರಾಕ್ಷಾಲತೆಗಳಿರುವ
ತೋಟಗಳಿರುತ್ತವೆ. ಪ್ರತಿಯೊಂದು ದ್ರಾಕ್ಷಾಲತೆಯು
ಒಂದುಸಾವಿರ ಬೆಳ್ಳಿನಾಣ್ಯಗಳಷ್ಟು ಬೆಲೆಬಾಳುವಂಥದ್ದಾ
ಗಿರುತ್ತದೆ. ಆದರೆ ಅಂಥ ತೋಟಗಳು ಹಣಜಿಗಳಿಂದಲೂ
ಮುಳ್ಳುಗಿಡಗಳಿಂದಲೂ ತುಂಬಿ ಕೊಂಡಿರುವವು.
24ದೇಶವು ಕಾಡಾಗುವುದರಿಂದ ಜನರು ಆಯುಧಗ
ಳೊಡನೆ ಸಂಚರಿಸುವರು. 25ಒಂದು ಕಾಲದಲ್ಲಿ ಜನರು
ಈ ಬೆಟ್ಟಗಳ ಮೇಲೆ ವ್ಯವಸಾಯ ಮಾಡಿ ಬೆಳೆಯನ್ನು
ತೆಗೆಯುತ್ತಿದ್ದರು. ಆದರೆ ಆ ಸಮಯದಲ್ಲಿ ಜನರು ಅಲ್ಲಿಗೆ
ಹೋಗುವುದಿಲ್ಲ. ದೇಶವು ಹಣಜಿಯಿಂದಲೂ ಮುಳ್ಳು
ಗಿಡಗಳಿಂದಲೂ ತುಂಬಿರುವದು. ಆ ಸ್ಥಳಗಳಿಗೆ ದನ
ಕುರಿಗಳು ಮಾತ್ರವೇ ಹೋಗುತ್ತವೆ.’’

## ಅಶ್ಶೂರವು ಬೇಗನೇ ಬರುವದು

8 ಯೆಹೋವನು ಹೇಳಿದ್ದೇನೆಂದರೆ, ‘‘ಒಂದು ದೊಡ್ಡ
ಸುರುಳಿಯನ್ನು ತಂದು ಅದರ ಮೇಲೆ ಹೀಗೆ ಲೇಖನಿ
ಯಿಂದ ಬರೆ: ‘ಮಹೇರ್ ಶಾಲಾಲ್ ಹಾಷ್ ಬಜ್’
(ಇದರರ್ಥ ‘ಕೊಳ್ಳೆಗೆ ಅವಸರ’ ‘ಸೂರೆಗೆ ಆತುರ.’)’’
2ನಾನು ನಂಬಿಗಸ್ತರಾದ ಕೆಲವು ಜನರನ್ನು ಸಾಕ್ಷಿ
ಗೋಸ್ಕರವಾಗಿ ಆರಿಸಿಕೊಂಡೆನು. (ಅವರು ಯಾರೆಂದರೆ,
ಯಾಜಕನಾದ ಊರೀಯ ಮತ್ತು ಯೆಬೆರೆಕ್ಯನ ಮಗ
ನಾದ ಜೆಕರ್ಯ.) ನಾನು ಆ ವಾಕ್ಯವನ್ನು ಬರೆಯುವಾಗ
ಇವರು ನೋಡುತ್ತಿದ್ದರು. 3ಆಮೇಲೆ ನಾನು ಒಬ್ಬ
ಪ್ರವಾದಿನಿಯ ಬಳಿಗೆ ಹೋದೆನು. ಆಕೆ ಗರ್ಭವತಿಯಾಗಿ
ಒಬ್ಬ ಮಗನನ್ನು ಹಡೆದಳು. ಆಗ ಯೆಹೋವನು ನನಗೆ,
‘‘ಆ ಮಗನಿಗೆ ‘ಮಹೇರ್ ಶಾಲಾಲ್ ಹಾಷ್ ಬಜ್’
ಎಂಬ ಹೆಸರನ್ನಿಡು. 4ಯಾಕೆಂದರೆ ಆ ಮಗನು ಅಪ್ಪಾ,
ಅಮ್ಮಾ ಎಂದು ಕರೆಯಲು ತೊಡಗುವ ಮೊದಲೇ
ದೇವರು ದಮಸ್ಕ ಮತ್ತು ಸಮಾರ್ಯದ ಎಲ್ಲಾ ಐಶ್ವರ್ಯ
ವನ್ನು ತೆಗೆದು ಅದನ್ನು ಅಶ್ಶೂರದ ರಾಜನಿಗೆ ಕೊಡು
ವನು’’ ಎಂದು ಹೇಳಿದನು.
5ಮತ್ತೆ ಯೆಹೋವನು ನನ್ನೊಂದಿಗೆ ಮಾತನಾಡಿದನು.
6ನನ್ನ ಒಡೆಯನು ಇಂತೆಂದನು: ‘‘ಈ ಜನರು ನಿಧಾನ
ವಾಗಿ ಹರಿಯುವ ಸಿಲೋವ ಕೊಳದ ನೀರನ್ನು ಸ್ವೀಕರಿಸು
ವುದಿಲ್ಲ. ಇವರು ರೆಚೀನ್ ಮತ್ತು ರೆಮಲ್ಯನ ಮಗ
ನೊಂದಿಗೆ ಸಂತೋಷದಲ್ಲಿದ್ದಾರೆ. 7ಯೆಹೋವನಾದ
ನಾನು ನಿಮಗೆ ವಿರುದ್ಧವಾಗಿ ಅಶ್ಶೂರದ ಅರಸನನ್ನೂ
ಅವನ ಸಮಸ್ತ ಸೈನ್ಯವನ್ನೂ ತರುವೆನು. ಅವರು ಯೂಫ್ರೇ
ಟೀಸ್ ನದಿಯ ರಭಸದ ಪ್ರವಾಹದ ನೀರಿನಂತೆ ಬರು
ವರು. ಅವರು ನದಿಯ ದಂಡೆಯ ಮೇಲೆ ಏರಿಬರುವ
ನೀರಿನಂತಿರುವರು. 8ಆ ನೀರು ಹೊಳೆಯಿಂದಾಚೆ ಬಂದು
ಯೆಹೂದದ ಮೇಲೆ ಹರಿಯುವುದು. ಆ ನೀರು ಏರುತ್ತಾ
ಬಂದು ಯೆಹೂದವನ್ನು ಕುತ್ತಿಗೆಯ ತನಕ ಮುಳುಗಿಸು
ವದು ಮಾತ್ರವಲ್ಲ ಅದನ್ನು ಸಂಪೂರ್ಣವಾಗಿ ಮುಳುಗಿಸಿ
ಬಿಡುವದು.
‘‘ಇಮ್ಮಾನುವೇಲನೇ, ಈ ಜಲಪ್ರವಾಹವು ಎಲ್ಲಾ ಕಡೆ
ಗಳಿಗೆ ಹಬ್ಬುತ್ತಾ ನಿಮ್ಮ ದೇಶವನ್ನು ಪೂರ್ತಿಯಾಗಿ ಮುಚ್ಚಿ
ಬಿಡುವದು.’’

## ಯೆಹೋವನು ತನ್ನ ಸೇವಕರನ್ನು ಸಂರಕ್ಷಿಸುವನು

9 ಸಮಸ್ತ ದೇಶಗಳವರೇ, ಯುದ್ಧಕ್ಕೆ ಸಿದ್ಧರಾಗಿ! ನೀವು
ಸೋಲುವಿರಿ. ದೂರದೇಶದವರೇ, ಕೇಳಿರಿ, ರಣ
ರಂಗಕ್ಕಿಳಿಯಲು ಸಿದ್ಧರಾಗಿ! ನೀವು ಸೋಲುವಿರಿ.
10 ಯುದ್ಧಮಾಡಲು ಯೋಜನೆಹಾಕಿರಿ. ಆದರೆ ನಿಮ್ಮ
ಯೋಜನೆಯೆಲ್ಲಾ ನಿಷ್ಫಲವಾಗುವುದು. ನಿಮ್ಮ

ಸೈನ್ಯಕ್ಕೆ ಆಜ್ಞೆಕೊಡಿರಿ. ಆದರೆ ಅದು ನಿಷ್ಪ್ರಯೋಜಕ
ವಾಗುವುದು. ಯಾಕೆಂದರೆ ದೇವರು ನಮ್ಮೊಂದಿ
ಗಿದ್ದಾನೆ!

### ಯೆಶಾಯನಿಗೆ ಎಚ್ಚರಿಕೆ

11 ಯೆಹೋವನು ತನ್ನ ಮಹಾಶಕ್ತಿಯಿಂದ ನನ್ನೊಡನೆ
ಮಾತನಾಡಿದನು. ನಾನು ಇತರರಂತೆ ಇರಬಾರದೆಂದು
ಯೆಹೋವನು ನನ್ನನ್ನು ಎಚ್ಚರಿಸಿದನು. ಆತನು ನನಗೆ,
12 ''ಪ್ರತಿಯೊಬ್ಬನೂ 'ಇನ್ನೊಬ್ಬನು ನಿನಗೆ ವಿರುದ್ಧವಾಗಿ
ಕೇಡು ಬಗೆಯುತ್ತಾನೆ' ಎಂದು ಹೇಳುವನು. ಅದನ್ನು
ನೀನು ನಂಬಬೇಡ. ಆ ಜನರು ಭಯಪಡುವ ವಿಷಯ
ಗಳಿಗೆ ನೀನು ಭಯಪಡಬೇಡ.''
13 ಸರ್ವಶಕ್ತನಾದ ಯೆಹೋವನೊಬ್ಬನಿಗೇ ನೀನು
ಭಯಪಡಬೇಕು. ಆತನನ್ನೇ ನೀನು ಗೌರವಿಸಬೇಕು.
ನೀನು ಭಯಪಡಬೇಕಾದದ್ದು ಆತನೊಬ್ಬನಿಗೇ.
14 ನೀನು ಯೆಹೋವನನ್ನು ಪರಿಶುದ್ಧನೆಂದು ಪರಿಗಣಿಸಿ
ಗೌರವಿಸಿದರೆ, ಆತನು ನಿನಗೆ ಆಶ್ರಯನಾಗುವನು.
ಆದರೆ ನೀನು ಆತನನ್ನು ಸನ್ಮಾನಿಸದೆ ಹೋದರೆ ಆತನು
ನಿನಗೆ ಮುಗ್ಗರಿಸುವ ಕಲ್ಲಾಗಿ ಪರಿಣಮಿಸುವನು. ಆತನು
ಇಸ್ರೇಲಿನ ಎರಡು ಕುಟುಂಬಗಳವರಿಗೆ ಮುಗ್ಗರಿಸಿ ಬೀಳಿ
ಸುವ ಬಂಡೆಯಾಗಿರುವನು. ಯೆಹೋವನು ಜೆರುಸಲೇ
ಮಿನ ಎಲ್ಲಾ ಜನರನ್ನು ಹಿಡಿಯುವ ಬಲೆಯಾಗಿರುವನು.
15 ಎಷ್ಟೋ ಜನರು ಈ ಬಂಡೆಯನ್ನು ಎಡವಿಬೀಳುವರು.
ಅವರು ಬಿದ್ದು ಮುರಿಯಲ್ಪಡುವರು; ಬಲೆಗೆ ಸಿಕ್ಕಿ
ಕೊಳ್ಳುವರು.
16 ಯೆಶಾಯನು, ''ಒಡಂಬಡಿಕೆ ಮಾಡಿಕೊಂಡು
ಅದಕ್ಕೆ ಮುದ್ರೆಹಾಕು. ಮುಂದಿನ ಪೀಳಿಗೆಗಾಗಿ ನನ್ನ
ಬೋಧನೆಯನ್ನು ಜೋಪಾನವಾಗಿರಿಸು. ನನ್ನ ಹಿಂಬಾಲ
ಕರ ಕಣ್ಣೆದುರಿನಲ್ಲೇ ಹೀಗೆ ಮಾಡು'' ಎಂದು ಹೇಳಿದನು.
17 ಆ ಒಡಂಬಡಿಕೆಯು ಹೀಗಿತ್ತು:

ನನ್ನ ದೇವರಾದ ಯೆಹೋವನ ಸಹಾಯಕ್ಕಾಗಿ
ನಾನು ಕಾಯುತ್ತಿರುವೆನು. ಯಾಕೋಬನ
ಕುಟುಂಬದ ಬಗ್ಗೆ ಯೆಹೋವನು ನಾಚಿಕೊಂಡಿ
ದ್ದಾನೆ. ಅವರ ಕಡೆನೋಡಲು ಆತನು ನಿರಾಕರಿಸು
ತ್ತಾನೆ. ಆದರೆ ನಾನು ಯೆಹೋವನನ್ನು ನಿರೀಕ್ಷಿಸು
ವೆನು. ಆತನು ನಮ್ಮನ್ನು ರಕ್ಷಿಸುವನು.

18 ''ನಾನೂ ನನ್ನ ಮಕ್ಕಳೂ ಇಸ್ರೇಲ್ ಜನರಿಗೆ ಒಂದು
ಗುರುತಾಗಿದ್ದೇವೆ. ಸರ್ವಶಕ್ತನಾದ ದೇವರು ನಮ್ಮನ್ನು
ಕಳುಹಿಸಿದ್ದಾನೆ. ಆತನು ಚೀಯೋನ್ ಬೆಟ್ಟದಲ್ಲಿ
ವಾಸಿಸುತ್ತಾನೆ.''
19 ಕೆಲವರು ''ಏನು ಮಾಡಬೇಕೆಂದು ಕಣಿ ಹೇಳುವವ
ರನ್ನೂ ಮಂತ್ರವಾದಿಗಳನ್ನೂ ವಿಚಾರಿಸು'' ಎಂದು ಹೇಳು
ತ್ತಾರೆ. (ಕಣಿಹೇಳುವವರು ತಾವು ಮಂತ್ರಶಕ್ತಿಯುಳ್ಳವ
ರೆಂದು ಜನರಿಗೆ ತೋರಿಸಲು ಪಕ್ಷಿಗಳು ಮಾಡುವ ಶಬ್ದ
ವನ್ನು ಬಾಯಿಂದ ಮಾಡಿ ತಮಗೆ ರಹಸ್ಯಗಳು ಗೊತ್ತಿವೆ
ಎಂದು ತೋರಿಸಿಕೊಳ್ಳುತ್ತಾರೆ.) ನಾನು ಹೇಳುವದೇ
ನೆಂದರೆ, ಜನರು ಸಹಾಯಕ್ಕಾಗಿ ದೇವರನ್ನೇ ಕೇಳಿಕೊಳ್ಳ
ಬೇಕು. ಆ ಕಣಿ ಹೇಳುವವರೂ ಮಂತ್ರವಾದಿಗಳೂ ತಾವು
ಏನು ಮಾಡಬೇಕೆಂದು ಸತ್ತವರನ್ನು ವಿಚಾರಿಸುವರು.
ಜೀವಿಸುವವರು ಸತ್ತವರನ್ನು ಯಾಕೆ ವಿಚಾರಿಸಬೇಕು?
20 ನೀವು ಉಪದೇಶಗಳಿಗೂ ಒಡಂಬಡಿಕೆಗೂ
ವಿಧೇಯರಾಗಿರಬೇಕು. ನೀವು ಈ ಆಜ್ಞೆಗಳನ್ನು ಅನುಸರಿ
ಸದಿದ್ದರೆ, ತಪ್ಪು ಆಜ್ಞೆಗಳನ್ನು ಹಿಂಬಾಲಿಸುವಿರಿ. ಮಂತ್ರ
ವಾದಿಗಳಿಂದ, ಕಣಿಹೇಳುವವರಿಂದ ಬರುವ ಆಜ್ಞೆಗಳೇ
ತಪ್ಪು ಆಜ್ಞೆಗಳು. ಅವುಗಳಿಗೆ ಯಾವ ಬೆಲೆಯೂ ಇಲ್ಲ.
ಅವುಗಳನ್ನು ಅನುಸರಿಸುವುದರಿಂದ ನಿಮಗೆ ಯಾವ
ಪ್ರಯೋಜನವೂ ಇಲ್ಲ.
21 ನೀವು ಆ ತಪ್ಪಾದ ಆಜ್ಞೆಗಳನ್ನು ಅನುಸರಿಸಿದರೆ ನಿಮ್ಮ
ದೇಶದಲ್ಲಿ ಸಂಕಟವೂ ಹಸಿವೆಯೂ ಉಂಟಾಗುತ್ತವೆ.
ಜನರು ಹಸಿವಿನಿಂದ ಬಳಲುವರು. ಆಗ ಅವರಲ್ಲಿ ಸಿಟ್ಟು
ಉಂಟಾಗಿ ತಮ್ಮ ಅರಸನನ್ನೂ ಅವನ ದೇವರುಗಳನ್ನೂ
ಬೈಯುವರು ಮತ್ತು ಸಹಾಯಕ್ಕಾಗಿ ದೇವರಿಗೆ ಮೊರೆ
ಯಿಡುವರು. 22 ತಮ್ಮ ದೇಶದಲ್ಲಿ ಸುತ್ತಲೂ ನೋಡು
ವಾಗ ಕೇವಲ ಸಂಕಟಗಳೇ ಕುಗ್ಗಿಸುವ ಕಾರ್ಗತ್ತಲೆಗಳೇ
ಕಾಣಿಸುವವು. ಆ ದುಃಖವು ಅವರನ್ನು ದೇಶದಿಂದ
ತೊಲಗಿಸಿಬಿಡುವುದು. ಕಾರ್ಗತ್ತಲೆಯಲ್ಲಿ ಸಿಕ್ಕಿಬಿದ್ದ
ಜನರಿಗೆ ತಮ್ಮನ್ನು ಬಿಡಿಸಿಕೊಳ್ಳಲಾಗುವುದಿಲ್ಲ.

### ಒಂದು ಹೊಸ ದಿನ ಬರುವುದು

9 ಹಿಂದಿನ ಕಾಲದಲ್ಲಿ, ಜೆಬುಲೂನ್ ಮತ್ತು ನಫ್ತಾಲಿ
ಪ್ರಾಂತ್ಯಗಳು ವಿಶೇಷವಾದವುಗಳಲ್ಲ ಎಂದು ಜನರು
ತಿಳಿದುಕೊಂಡಿದ್ದರು. ಆದರೆ ಆಮೇಲೆ ಸಮುದ್ರಕ್ಕೆ
ಸಮೀಪದಲ್ಲಿರುವ ಪ್ರಾಂತ್ಯ, ಜೋರ್ಡನ್ನಿನ ಆಚೆಗಿರುವ
ಸ್ಥಳ ಮತ್ತು ಯೆಹೂದ್ಯರಲ್ಲದವರು ವಾಸಿಸುವ ಗಲಿ
ಲಾಯ ಪ್ರಾಂತ್ಯ ಇವುಗಳನ್ನು (ಮುಂದೆ) ದೇವರು ಮಹಾ
ದೇಶವನ್ನಾಗಿ ಮಾಡುವನು.
2 ಈಗ ಅವರು ಕತ್ತಲಲ್ಲಿ ವಾಸಿಸುವರು. ಆದರೆ ಒಂದು
ದೊಡ್ಡ ಬೆಳಕನ್ನು ಅವರು ನೋಡುವರು. ಅವರಿರುವ
ಸ್ಥಳವು ಮರಣದ ಸ್ಥಳದಂತೆ ಅಂಧಕಾರದಿಂದ ತುಂಬಿದೆ.
ಆದರೆ ದೊಡ್ಡ ಬೆಳಕು ಅವರ ಮೇಲೆ ಪ್ರಕಾಶಿಸುವದು.
3 ದೇವರೆ, ಆ ದೇಶವನ್ನು ನೀನು ಅಭಿವೃದ್ಧಿಪಡಿಸುವೆ.
ನೀನು ಆ ಜನರನ್ನು ಸಂತೋಷಪಡಿಸುವೆ. ಅವರು ತಮ್ಮ

ಸಂತಸವನ್ನು ವ್ಯಕ್ತ ಪಡಿಸುವರು. ಅದು ಸುಗ್ಗಿ ಕಾಲದಲ್ಲಿ
ರುವ ಸಂತಸದಂತೆಯೂ ಯುದ್ಧದಲ್ಲಿ ಗಳಿಸಿದ ಕೊಳ್ಳೆಯ
ಪಾಲು ದೊರೆತಾಗ ಉಂಟಾಗುವ ಸಂತಸದಂತೆಯೂ
ಇರುವುದು. 4ಯಾಕೆಂದರೆ ಅವರ ಮೇಲಿದ್ದ ಭಾರವನ್ನು
ನೀನು ತೆಗೆದುಬಿಡುವೆ. ಅವರ ಬೆನ್ನಿನ ಮೇಲಿದ್ದ ಭಾರ
ವಾದ ನೊಗವನ್ನು ನೀನು ತೆಗೆದುಹಾಕುವೆ; ವೈರಿಗಳು ನಿನ್ನ
ಜನರನ್ನು ಶಿಕ್ಷಿಸಲು ಉಪಯೋಗಿಸುವ ಬೆತ್ತವನ್ನು ತೆಗೆದು
ಬಿಡುವೆ. ಆ ಸಮಯವು ನೀನು ಮಿದ್ಯಾನರನ್ನು
ಸೋಲಿಸಿದ ಸಮಯದಂತಿರುವದು.

5ರಣರಂಗದಲ್ಲಿ ನಡೆಯುವ ಪ್ರತಿಯೊಂದು ಪಾದರಕ್ಷೆ
ಯನ್ನೂ ನಾಶಮಾಡಲಾಗುವುದು; ರಕ್ತದ ಕಲೆಯಿರುವ
ಪ್ರತಿಯೊಂದು ಸಮವಸ್ತ್ರವನ್ನೂ ನಾಶಮಾಡಲಾಗುವದು.
ಅವುಗಳೆಲ್ಲವನ್ನು ಬೆಂಕಿಯಲ್ಲಿ ಹಾಕಲಾಗುವದು.
6ವಿಶೇಷವಾದ ಗಂಡುಮಗುವು ಜನಿಸಿದಾಗ ಇವೆಲ್ಲಾ
ಸಂಭವಿಸುವದು. ದೇವರು ನಮಗೊಬ್ಬ ಮಗನನ್ನು
ಕೊಡುವನು. ಈ ಮಗನು ಜನರನ್ನು ನಡಿಸುವದಕ್ಕೆ ಜವಾ
ಬ್ದಾರಿಯನ್ನು ಹೊಂದಿದವನಾಗುವನು. ಆತನ ಹೆಸರು
‘‘ಅದ್ಭುತ ಸ್ವರೂಪನು, ಆಲೋಚನಾಕರ್ತನು, ಸರ್ವಶಕ್ತ
ನಾದ ಯೆಹೋವನು, ನಿತ್ಯನಾದ ತಂದೆ, ಸಮಾಧಾನದ
ಅರಸನು’’ ಎಂಬುದಾಗಿ ಇರುವದು. 7ಆತನ ರಾಜ್ಯದಲ್ಲಿ
ಸಮಾಧಾನವೂ ಅಧಿಕಾರವೂ ಇರುತ್ತದೆ. ದಾವೀದನ
ಕುಟುಂಬದವನ ರಾಜ್ಯದಲ್ಲಿ ಅವು ಸ್ಥಿರವಾಗಿರುತ್ತವೆ. ಈ
ಅರಸನು ನ್ಯಾಯ ನೀತಿಗಳಿಂದ ನಿತ್ಯಕಾಲಕ್ಕೂ ರಾಜ್ಯ
ವಾಳುವನು.

ಸರ್ವಶಕ್ತನಾದ ಯೆಹೋವನಿಗೆ ತನ್ನ ಜನರ ಮೇಲೆ
ಬಲವಾದ ಪ್ರೀತಿಯಿದೆ. ಆತನು ಈ ಕಾರ್ಯಗಳನ್ನೆಲ್ಲಾ
ಮಾಡಲು ಈ ಪ್ರೀತಿಯೇ ಕಾರಣ.

### ದೇವರು ಇಸ್ರೇಲನ್ನು ಶಿಕ್ಷಿಸುವನು

8ಯಾಕೋಬನ ಜನರಿಗೆ (ಇಸ್ರೇಲರಿಗೆ), ನನ್ನ ದೇವ
ರಾದ ಯೆಹೋವನು ಆಜ್ಞೆಯನ್ನು ಕೊಟ್ಟಿದ್ದಾನೆ.
ಇಸ್ರೇಲರಿಗೆ ವಿರುದ್ಧವಾಗಿರುವ ಈ ಆಜ್ಞೆಯು ನೆರವೇರ
ಲ್ಪಡುವುದು. 9ಆಗ ಎಫ್ರಾಯೀಮಿನಲ್ಲಿರುವ (ಇಸ್ರೇಲಿನ
ಲ್ಲಿರುವ) ಪ್ರತಿಯೊಬ್ಬನೂ, ಸಮಾರ್ಯದ ನಾಯಕರೂ
ದೇವರು ತಮ್ಮನ್ನು ಶಿಕ್ಷಿಸಿದ್ದಾನೆಂದು ತಿಳಿದುಕೊಳ್ಳುವರು.

ಅವರು ಬಹು ಗರ್ವಿಷ್ಠರಾಗಿ ಹೆಚ್ಚಳಪಡುತ್ತಿದ್ದಾರೆ.
ಅವರು ಹೇಳುವದೇನೆಂದರೆ, 10‘‘ಈ ಇಟ್ಟಿಗೆಗಳು ಕೆಳಗೆ
ಬಿದ್ದರೂ ನಾವು ಅವುಗಳನ್ನು ಮತ್ತೆ ಕಟ್ಟುತ್ತೇವೆ. ನಾವು
ಅದನ್ನು ಬಲವಾದ ಕಲ್ಲುಗಳಿಂದ ಕಟ್ಟುವೆವು. ಈ ಸಣ್ಣಸಣ್ಣ
ಮರಗಳು ಕಡಿದು ಹಾಕಲ್ಪಟ್ಟರೂ ಆ ಸ್ಥಳದಲ್ಲಿ ನಾವು
ಹೊಸ ಮರಗಳನ್ನು ನೆಡುವೆವು. ಆ ಹೊಸ ಮರಗಳು
ಎತ್ತರವಾಗಿಯೂ ಬಲವಾಗಿಯೂ ಇರುತ್ತವೆ.’’

11ಹೀಗೆ ಯೆಹೋವನು ಇಸ್ರೇಲಿಗೆ ವಿರುದ್ಧವಾಗಿ
ಯುದ್ಧ ಮಾಡುವವರನ್ನು ಕಂಡು ಹಿಡಿಯುವನು.
ಯೆಹೋವನು ರೆಚೀನನ ವೈರಿಗಳನ್ನು ಅವನಿಗೆ ವಿರುದ್ಧ
ವಾಗಿ ಎಬ್ಬಿಸುವನು. 12ಯೆಹೋವನು ಪೂರ್ವದಿಂದ
ಅರಾಮ್ಯರನ್ನೂ ಪಶ್ಚಿಮದಿಂದ ಫಿಲಿಷ್ಟಿಯರನ್ನೂ ಕರೆ
ತರುವನು. ಆ ಶತ್ರುಗಳು ಇಸ್ರೇಲರನ್ನು ಅವರ ಸೈನ್ಯ
ದೊಂದಿಗೆ ಸೋಲಿಸಿಬಿಡುವರು. ಆದರೆ ಯೆಹೋವನು
ಇಸ್ರೇಲರ ಮೇಲೆ ಕೋಪಗೊಂಡಿರುವುದರಿಂದ ಅವ
ರನ್ನು ಶಿಕ್ಷಿಸಲು ಇನ್ನೂ ಸಿದ್ಧನಾಗಿರುವನು.

13ದೇವರು ಜನರನ್ನು ಶಿಕ್ಷಿಸಿದರೂ ಅವರು ಪಾಪ
ಮಾಡುವದನ್ನು ನಿಲ್ಲಿಸುವದಿಲ್ಲ. ಅವರು ಆತನ ಬಳಿಗೆ
ಹಿಂದಿರುಗಿ ಬರುವದಿಲ್ಲ. ಸರ್ವಶಕ್ತನಾದ ದೇವರನ್ನು
ಅವರು ಹಿಂಬಾಲಿಸುವುದಿಲ್ಲ. 14ಆದುದರಿಂದ ಯೆಹೋ
ವನು ಇಸ್ರೇಲರ ತಲೆಯನ್ನೂ ಬಾಲವನ್ನೂ ಕತ್ತರಿಸು
ವನು. ಒಂದೇ ದಿವಸದಲ್ಲಿ ಯೆಹೋವನು ಮರದ ಕಾಂಡ
ವನ್ನೂ ಕೊಂಬೆಗಳನ್ನೂ ಕತ್ತರಿಸಿಬಿಡುವನು. 15ತಲೆ
ಅಂದರೆ ಹಿರಿಯರು ಮತ್ತು ಪ್ರಮುಖರು. ಬಾಲವೆಂದರೆ
ಸುಳ್ಳುಪ್ರವಾದಿಗಳು.

16ಜನರಿಗೆ ಮಾರ್ಗದರ್ಶನ ಮಾಡುವ ನಾಯಕರು
ಜನರನ್ನು ತಪ್ಪುದಾರಿಯಲ್ಲಿ ನಡಿಸುತ್ತಿದ್ದಾರೆ. ಅವರನ್ನು
ಹಿಂಬಾಲಿಸುವ ಜನರು ನಾಶವಾಗುವರು. 17ಜನರೆಲ್ಲರೂ
ದುಷ್ಟರಾಗಿದ್ದಾರೆ. ಆದುದರಿಂದ ಯೆಹೋವನು ಯುವಕ
ರಲ್ಲಿ ಸಂತೋಷಿಸುವದಿಲ್ಲ. ಅವರ ವಿಧವೆಯರಿಗೆ ಮತ್ತು
ಅನಾಥರಿಗೆ ದೇವರು ದಯೆತೋರಿಸುವುದಿಲ್ಲ;
ಯಾಕೆಂದರೆ ಎಲ್ಲಾ ಜನರು ದುಷ್ಟರಾಗಿದ್ದಾರೆ. ಅವರು
ದೇವರಿಗೆ ವಿರುದ್ಧವಾಗಿ ನಡೆಯುತ್ತಾರೆ. ಅವರು ಸುಳ್ಳಾ
ಡುತ್ತಾರೆ. ಆದುದರಿಂದ ದೇವರು ಅವರ ಮೇಲೆ ಕೋಪ
ದಿಂದಲೇ ಇರುವನು; ಅವರನ್ನು ದಂಡಿಸುತ್ತಲೇ
ಇರುವನು.

18ದುಷ್ಟತನವು ಒಂದು ಚಿಕ್ಕ ಬೆಂಕಿಯಂತಿದೆ. ಮೊಟ್ಟ
ಮೊದಲು ಬೆಂಕಿಯು ಹಣಜಿಗಳನ್ನು ಮತ್ತು ಮುಳ್ಳು
ಗಿಡಗಳನ್ನು ಸುಡುವುದು. ಅನಂತರ ಬೆಂಕಿಯು ಕಾಡಿನ
ದೊಡ್ಡ ಪೊದೆಗಳನ್ನು ಸುಡುವುದು. ಕೊನೆಗದು ದೊಡ್ಡ
ಗಾತ್ರದ ಬೆಂಕಿಯಾಗಿ ಎಲ್ಲವನ್ನೂ ಸುಟ್ಟುಬಿಟ್ಟು ಎಲ್ಲವೂ
ಹೊಗೆಯಾಗಿ ಪರಿಣಮಿಸುವದು.

19ಸರ್ವಶಕ್ತನಾದ ಯೆಹೋವನು ಕೋಪಗೊಂಡಿರು
ವುದರಿಂದ ದೇಶವೆಲ್ಲಾ ಸುಟ್ಟುಹೋಗುವದು. ಆ ಬೆಂಕಿ
ಯಲ್ಲಿ ಜನರೆಲ್ಲಾ ಸುಟ್ಟುಹೋಗುವರು. ಯಾರೂ ತನ್ನ
ಸಹೋದರರನ್ನು ರಕ್ಷಿಸಲು ಪ್ರಯತ್ನಿಸುವದಿಲ್ಲ.
20ಜನರು ತಮ್ಮ ಬಲಗಡೆಯಲ್ಲಿರುವದನ್ನು ಕಿತ್ತುಕೊಳ್ಳು
ವರು. ಆದರೆ ಅದು ಅವರ ಹಸಿವೆಯನ್ನು ನೀಗುವುದಿಲ್ಲ.
ಜನರು ಎಡಬದಿಯಲ್ಲಿರುವದನ್ನು ತಿನ್ನುವರು; ಆದರೆ

ಅವರ ಹೊಟ್ಟೆತುಂಬುವದಿಲ್ಲ. ಆ ಬಳಿಕ ಪ್ರತಿಯೊಬ್ಬನು
ತನ್ನ ಶರೀರವನ್ನೇ ತಿನ್ನಲು ಪ್ರಾರಂಭಿಸುವನು. 21 (ಇದರ
ರ್ಥವೇನೆಂದರೆ ಮನಸ್ಸೆಯು ಎಫ್ರಾಯೀಮನೊಡನೆ
ಯುದ್ಧ ಮಾಡುವನು ಮತ್ತು ಎಫ್ರಾಯೀಮನು ಮನಸ್ಸೆ
ಯೊಂದಿಗೆ ಯುದ್ಧಮಾಡುವನು. ಆಮೇಲೆ ಅವರಿಬ್ಬರೂ
ಸೇರಿ ಯೆಹೂದದೊಂದಿಗೆ ಯುದ್ಧ ಮಾಡುವರು.)

ಯೆಹೋವನು ಇಸ್ರೇಲರ ಮೇಲೆ ಇನ್ನೂ ಕೋಪ
ದಿಂದಿದ್ದಾನೆ; ತನ್ನ ಜನರನ್ನು ಇನ್ನೂ ಶಿಕ್ಷಿಸಲು ಸಿದ್ಧ
ನಾಗಿದ್ದಾನೆ.

10 ಕೆಟ್ಟ ನಿಯಮವನ್ನು ಬರೆಯುವ ನ್ಯಾಯಶಾಸ್ತ್ರಿ
ಗಳನ್ನು ನೋಡಿರಿ. ಆ ನ್ಯಾಯಶಾಸ್ತ್ರಿಗಳು ಜನ
ರಿಗೆ ಕಷ್ಟವಾಗಿರುವ ನಿಯಮಗಳನ್ನೇ ಮಾಡುತ್ತಾರೆ.
2 ಅವರು ಬಡವರಿಗೆ ನ್ಯಾಯವಂತರಾಗಿರುವುದಿಲ್ಲ.
ಅವರು ಬಡಜನರ ಹಕ್ಕನ್ನು ತೆಗೆದುಬಿಡುವರು. ಜನರು
ವಿಧವೆಯರಿಂದಲೂ ಅನಾಥರಿಂದಲೂ ಹಣ ಕಿತ್ತು
ಕೊಳ್ಳುವಂತೆ ಮಾಡುವರು.

3 ನ್ಯಾಯಶಾಸ್ತ್ರಿಗಳೇ, ನಿಮ್ಮ ಕಾರ್ಯಗಳಿಗೆ ನೀವೇ
ಉತ್ತರ ಕೊಡಬೇಕು. ಆಗ ನೀವು ಏನು ಮಾಡುವಿರಿ?
ದೂರದೇಶದಿಂದ ನಿಮ್ಮ ನಾಶನವು ಬರುತ್ತಲಿದೆ.
ಸಹಾಯಕ್ಕಾಗಿ ಎತ್ತ ಓಡುವಿರಿ? ನಿಮ್ಮ ಐಶ್ವರ್ಯವೂ
ನಿಮ್ಮ ಧನರಾಶಿಯೂ ನಿಮ್ಮನ್ನು ರಕ್ಷಿಸಲಾರವು. 4 ನೀವು
ಕೈದಿಯಂತೆ ತಲೆತಗ್ಗಿಸುವಿರಿ, ಸತ್ತಹೆಣದಂತೆ ನೆಲದ ಮೇಲೆ
ಬೀಳುವಿರಿ. ಆದರೆ ಅದರಿಂದ ನಿಮಗೆ ಪ್ರಯೋಜನ
ವಾಗದು. ದೇವರು ನಿಮ್ಮ ಮೇಲೆ ಬಹಳವಾಗಿ ಕೋಪ
ಗೊಂಡಿದ್ದಾನೆ. ನಿಮ್ಮನ್ನು ಇನ್ನು ಶಿಕ್ಷಿಸಲು ಸಿದ್ಧ
ನಾಗಿದ್ದಾನೆ.

5 ದೇವರು ಹೀಗೆ ಹೇಳುವನು: ''ನಾನು ಕೋಪ
ಗೊಂಡಾಗ ಬೆತ್ತವನ್ನು ಹೇಗೆ ಉಪಯೋಗಿಸುವೆನೋ
ಹಾಗೆಯೇ ಇಸ್ರೇಲನ್ನು ಶಿಕ್ಷಿಸಲು ಅಶ್ಶೂರವನ್ನು ಉಪ
ಯೋಗಿಸುವೆನು. 6 ದುಷ್ಟಕಾರ್ಯಗಳನ್ನು ಮಾಡುವವರ
ವಿರುದ್ಧವಾಗಿ ಯುದ್ಧಮಾಡಲು ನಾನು ಅಶ್ಶೂರವನ್ನು
ಕಳುಹಿಸುವೆನು. ನಾನು ಅವರ ಮೇಲೆ ಕೋಪಗೊಂಡಿರು
ವೆನು. ಅಶ್ಶೂರಕ್ಕೆ ಅವರ ಮೇಲೆ ಯುದ್ಧಮಾಡುವಂತೆ
ಆಜ್ಞಾಪಿಸುವೆನು. ಅಶ್ಶೂರವು ಅವರನ್ನು ಸೋಲಿಸಿ ಅವರ
ಐಶ್ವರ್ಯವನ್ನೆಲ್ಲಾ ಸೂರೆಮಾಡುವದು. ಇಸ್ರೇಲು
ಅಶ್ಶೂರದವರಿಗೆ ಭೀದಿಯ ದೂಳಿನಂತಾಗುವದು.

7 ''ಆದರೆ ನಾನು ಅಶ್ಶೂರವನ್ನು ಉಪಯೋಗಿಸುತ್ತೇ
ನೆಂದು ಅದಕ್ಕೆ ತಿಳಿಯದು. ಅಶ್ಶೂರಕ್ಕೆ ತಾನು ನನ್ನ
ಕೈಯಲ್ಲಿರುವ ಒಂದು ಸಾಧನವೆಂದು ಗೊತ್ತಿರದು.
ಅನೇಕ ಜನಾಂಗಗಳನ್ನು ನಾಶ ಮಾಡಲು ಅಶ್ಶೂರವು
ಬಯಸುತ್ತದೆ ಮತ್ತು ಅದಕ್ಕಾಗಿ ಯೋಜನೆಗಳನ್ನು
ಮಾಡುತ್ತದೆ. 8 ಅಶ್ಶೂರವು ಹೀಗೆ ಹೇಳುತ್ತದೆ. 'ನನ್ನ
ನಾಯಕರೆಲ್ಲಾ ರಾಜರಂತಿರುತ್ತಾರೆ. 9 ಕಲ್ನೋ ನಗರವು
ಕರ್ಕೆಮೀಷ್ ಹಾಗೆ ಇರುವದು. ಹಮಾತ್ ನಗರವು
ಅರ್ಪದ್ ನಗರದಂತಿರುವದು. ಸಮಾರ್ಯ ಪಟ್ಟಣವು
ದಮಸ್ಕದಂತಿರುವದು. 10 ನಾನು ಆ ದುಷ್ಟರಾಜ್ಯಗಳನ್ನು
ಸೋಲಿಸಿಬಿಟ್ಟೆನು, ಈಗ ನಾನು ಅವುಗಳನ್ನು ಆಳುತ್ತಿ
ದ್ದೇನೆ. ಆ ಜನರು ಪೂಜಿಸುವ ವಿಗ್ರಹಗಳು ಜೆರುಸ
ಲೇಮ್ ಮತ್ತು ಸಮಾರ್ಯಗಳಲ್ಲಿರುವ ವಿಗ್ರಹಗಳಿಗಿಂತ
ವಿಶೇಷವಾಗಿವೆ. 11 ನಾನು ಸಮಾರ್ಯವನ್ನೂ ಅದರ
ವಿಗ್ರಹಗಳನ್ನೂ ನಾಶಮಾಡಿದೆ. ಈಗ ಜೆರುಸಲೇಮನ್ನೂ
ಅದರ ಜನರು ಮಾಡಿರುವ ವಿಗ್ರಹಗಳನ್ನೂ ನಾನು ನಾಶ
ಮಾಡುವೆನು.''

12 ಜೆರುಸಲೇಮಿಗೂ ಚೀಯೋನ್ ಪರ್ವತಕ್ಕೂ ಮಾಡ
ಬೇಕೆಂದಿರುವ ಕಾರ್ಯಗಳನ್ನು ನನ್ನ ಒಡೆಯನು ಮಾಡಿ
ತೀರಿಸುವನು. ಆ ಬಳಿಕ ಯೆಹೋವನು ಅಶ್ಶೂರವನ್ನು
ಶಿಕ್ಷಿಸುವನು. ಅಶ್ಶೂರದ ಅರಸನು ಬಹಳವಾಗಿ ಉಬ್ಬಿ
ಕೊಂಡಿರುತ್ತಾನೆ. ಅವನ ಗರ್ವವು ಅನೇಕ ದುಷ್ಟಕಾರ್ಯ
ಗಳನ್ನು ನಡೆಸಿದೆ. ಅದಕ್ಕಾಗಿ ದೇವರು ಅವನನ್ನು
ಶಿಕ್ಷಿಸುವನು.

13 ಅಶ್ಶೂರದ ಅರಸನು ಹೇಳುವದೇನೆಂದರೆ, ''ನಾನು
ಜ್ಞಾನಿಯಾಗಿದ್ದೇನೆ, ನನ್ನ ಸ್ವಂತ ಜ್ಞಾನದಿಂದಲೂ
ಸಾಮರ್ಥ್ಯದಿಂದಲೂ ನಾನು ಅನೇಕ ಮಹಾಕಾರ್ಯ
ಗಳನ್ನು ನಡಿಸಿದ್ದೇನೆ. ಅನೇಕ ಜನಾಂಗಗಳನ್ನು ಸೋಲಿಸಿ
ದ್ದೇನೆ; ಅವರ ಐಶ್ವರ್ಯಗಳನ್ನು ಸೂರೆಮಾಡಿದ್ದೇನೆ.
ಅವರ ಜನರನ್ನು ನನ್ನ ಗುಲಾಮರನ್ನಾಗಿ ಮಾಡಿದ್ದೇನೆ.
ನಾನು ಮಹಾ ವೀರನಾಗಿರುವೆ. 14 ಒಬ್ಬನು ಹಕ್ಕಿಯ
ಗೂಡಿನಿಂದ ಮೊಟ್ಟೆಗಳನ್ನು ತೆಗೆಯುವಂತೆ ನಾನು ಅವರ
ಐಶ್ವರ್ಯವನ್ನು ತೆಗೆದುಕೊಂಡಿರುವೆನು. ಹಕ್ಕಿಯು ತನ್ನ
ಗೂಡಿಗೆ ಯಾವ ಭದ್ರತೆಯನ್ನೂ ಮಾಡದೆ ಆಹಾರಕ್ಕಾಗಿ
ಹೋಗುವದು. ರೆಕ್ಕೆಯಾಡಿಸಿ, ಬಾಯಿದೆರೆದು, ಕೀಚು
ಗುಟ್ಟಿ ಮೊಟ್ಟೆಯನ್ನು ಶತ್ರುವಿನಿಂದ ರಕ್ಷಿಸಲು ಅದು
ಗೂಡಿನಲ್ಲಿರದು, ಆದ್ದರಿಂದ ಅದರ ಮೊಟ್ಟೆಗಳು ತೆಗೆಯ
ಲ್ಪಡುವವು. ಅದೇ ರೀತಿಯಲ್ಲಿ ನಾನು ಭೂಮಿಯ
ಮೇಲಿನ ಜನರನ್ನು ಕೈದಿಗಳನ್ನಾಗಿ ಮಾಡುವಾಗ ನನ್ನನ್ನು
ತಡೆಯುವವರು ಇಲ್ಲವೇ ಇಲ್ಲ.''

### ಅಶ್ಶೂರದ ಶಕ್ತಿಯನ್ನು ದೇವರು ನಿಯಂತ್ರಿಸುತ್ತಾನೆ

15 ಕೊಡಲಿಯು ಅದನ್ನು ಉಪಯೋಗಿಸುವವನಿಗಿಂತ
ಉತ್ತಮವಲ್ಲ. ಗರಗಸವು ಅದನ್ನು ಉಪಯೋಗಿಸುವವ
ನಿಗಿಂತ ಉತ್ತಮವಲ್ಲ. ಆದರೆ ಅಶ್ಶೂರವು ತಾನು ದೇವರಿ
ಗಿಂತಲೂ ಶಕ್ತಿಶಾಲಿ, ಸಾಮರ್ಥ್ಯವುಳ್ಳವನು ಎಂದು ನೆನಸು
ತ್ತಾನೆ. ಬೆತ್ತವು, ತನ್ನನ್ನು ಎತ್ತಿಹಿಡಿದು ಬೇರೆಯವರನ್ನು

ಶಿಕ್ಷಿಸುವವನಿಗಿಂತ ತಾನು ಬಲಿಷ್ಠನೂ ಪ್ರಮುಖನೂ
ಎಂದು ಹೇಳುವಂತಿದೆ ಇದು.
[16]ತಾನು ಮಹಾದೊಡ್ಡ ಜನವೆಂದು ಅಶ್ಶೂರವು ನೆನಸು
ತ್ತದೆ. ಆದರೆ ಸರ್ವಶಕ್ತನಾದ ಯೆಹೋವನು ಅಶ್ಶೂರದ
ಮೇಲೆ ಭಯಂಕರವಾದ ವ್ಯಾಧಿಯನ್ನು ಬರಮಾಡು
ತ್ತಾನೆ. ಒಬ್ಬ ರೋಗಿ ತನ್ನ ಅಸ್ವಸ್ಥತೆಯಿಂದ ಹೇಗೆ ಕೃಶ
ವಾಗುತ್ತಾನೋ ಹಾಗೆಯೇ ತನ್ನ ಶಕ್ತಿಯನ್ನೂ ಐಶ್ವರ್ಯ
ವನ್ನೂ ಅಶ್ಶೂರವು ಕಳೆದುಕೊಂಡು ಬಲಹೀನನಾಗು
ವನು. ಅಶ್ಶೂರದ ಮಹಿಮಾ ಪ್ರಭಾವಗಳು ಇಲ್ಲದೆ
ಹೋಗುವವು. ಬೆಂಕಿಯು ಸರ್ವವನ್ನು ಸುಟ್ಟು ನಾಶ
ಮಾಡುವಂತೆ ಇರುವದು. [17]ಇಸ್ರೇಲರ ಬೆಳಕು
(ದೇವರು) ಬೆಂಕಿಯಂತೆ ಇರುವನು. ಪರಿಶುದ್ಧನಾ
ದಾತನು ಬೆಂಕಿಯ ಜ್ವಾಲೆಯಂತಿರುವನು. ಮೊದಲು
ಹಣಜಿ ಕಸಕಡ್ಡಿಗಳನ್ನು ಸುಡುವ ಬೆಂಕಿಯಂತೆ ಆತನಿರು
ವನು. [18]ಆ ಮೇಲೆ ಆ ಬೆಂಕಿಯು ದೊಡ್ಡದೊಡ್ಡ ಮರಗ
ಳನ್ನು ಮತ್ತು ದ್ರಾಕ್ಷಾತೋಟಗಳನ್ನು ಸುಟ್ಟುಹಾಕುವದು.
ಕೊನೆಗೆ ಜನರನ್ನು ಮೊದಲುಗೊಂಡು ಪ್ರತಿಯೊಂದೂ
ನಾಶವಾಗುವುದು. ದೇವರು ಅಶ್ಶೂರವನ್ನು ನಾಶಮಾಡು
ವಾಗ ಹಾಗೆಯೇ ಆಗುವದು. ಅಶ್ಶೂರವು ಗೆದ್ದಲುಹುಳ
ತಿಂದ ಮರದ ದಿಮ್ಮಿಯಂತಿರುವದು. [19]ಆಗ ಅಡವಿ
ಯಲ್ಲಿ, ಒಂದು ಮಗು ಎಣಿಸಲು ಸಾಧ್ಯವಾಗುವಷ್ಟು ಮರ
ಗಳಿರುವವು.
[20]ಆಗ ಯಾಕೋಬನ ವಂಶದವರು, ಇಸ್ರೇಲರಲ್ಲಿ
ಅಳಿದುಳಿದವರು, ತಮ್ಮನ್ನು ಹೊಡೆಯುವವರನ್ನು
ಆಧಾರ ಮಾಡಿಕೊಳ್ಳದೆ ಇಸ್ರೇಲಿನ ಅತೀಪರಿಶುದ್ಧನಾದ
ಯೆಹೋವನನ್ನೇ ಆಧಾರ ಮಾಡಿಕೊಳ್ಳುವರು.
[21]ಯಾಕೋಬನ ವಂಶದಲ್ಲಿ ಉಳಿದುಳಿದವರು ಸರ್ವಶಕ್ತ
ನಾದ ದೇವರನ್ನು ಮತ್ತೆ ಅನುಸರಿಸತೊಡಗುವರು.
[22]ನಿನ್ನ ಜನರು ಬಹಳವಿರುವರು. ಅವರು ಸಮುದ್ರದ
ಮರಳಿನಂತಿದ್ದಾರೆ. ಆದರೆ ಅವರಲ್ಲಿ ಕೆಲವರೇ ಉಳಿದು
ಕರ್ತನ ಬಳಿಗೆ ಬರುವರು. ಆ ಜನರು ದೇವರ ಬಳಿಗೆ
ಹಿಂತಿರುಗುವರು. ಅದಕ್ಕಿಂತ ಮೊದಲು ನಿನ್ನ ದೇಶವು
ನಾಶವಾಗುವದು. ದೇಶವು ನಾಶವಾಗುವದೆಂದು
ದೇವರು ಪ್ರಕಟಿಸಿದ್ದಾನೆ. ಆ ಬಳಿಕ ದೇವರ ಒಳ್ಳೆತನವು
ಆ ದೇಶಕ್ಕೆ ಬರುವದು. ಅದು ದಡ ತುಂಬಿ ಹರಿಯುವ
ನದಿಯೋಪಾದಿಯಲ್ಲಿರುವದು. [23]ಸರ್ವಶಕ್ತನಾದ
ದೇವರು ಖಂಡಿತವಾಗಿಯೂ ಈ ದೇಶವನ್ನು ನಾಶ
ಮಾಡುತ್ತಾನೆ.
[24]ನನ್ನ ಒಡೆಯನೂ ಸರ್ವಶಕ್ತನೂ ಆದ ಯೆಹೋವನು
ಹೇಳುವದೇನೆಂದರೆ: ‘‘ಚೀಯೋನಿನಲ್ಲಿ ವಾಸಿಸುವ ನನ್ನ
ಜನರೇ, ಅಶ್ಶೂರಕ್ಕೆ ನೀವು ಭಯಪಡಬೇಡಿ. ಹಿಂದಿನ
ಕಾಲದಲ್ಲಿ ಈಜಿಪ್ಟು ನಿಮ್ಮನ್ನು ಬಾಧಿಸಿದಂತೆ ಇವನೂ
ನಿಮ್ಮನ್ನು ಬಾಧಿಸುವನು. ಅವನ ಬಾಧೆಯು ನಿಮ್ಮ ಬೆನ್ನಿನ
ಮೇಲೆ ಬೆತ್ತದಿಂದ ಹೊಡೆದಂತೆ ಇರುವದು. [25]ಆದರೆ
ಸ್ವಲ್ಪ ಸಮಯದ ನಂತರ ನನ್ನ ಸಿಟ್ಟು ತಣ್ಣಗಾಗುವದು.
ಅಶ್ಶೂರವು ಸಾಕಷ್ಟು ನಿಮ್ಮನ್ನು ಶಿಕ್ಷಿಸಿದನೆಂದು ನಾನು
ತೃಪ್ತಿಗೊಳ್ಳುವೆನು.’’
[26]ಆ ಬಳಿಕ ಸರ್ವಶಕ್ತನಾದ ಯೆಹೋವನು ಕೊರಡೆ
ಯಿಂದ ಅಶ್ಶೂರವನ್ನು ಹೊಡೆಯುವನು. ಹಿಂದಿನ ಕಾಲ
ದಲ್ಲಿ ಓರೇಬ್ ಬಂಡೆಯ ಮೇಲೆ ಮಿದ್ಯಾನ್ಯರನ್ನು
ಯೆಹೋವನು ಹೇಗೆ ಸೋಲಿಸಿದನೋ ಹಾಗೆಯೇ
ಅಶ್ಶೂರವನ್ನು ಸೋಲಿಸುವನು. ಹಿಂದಿನ ಕಾಲದಲ್ಲಿ
ಯೆಹೋವನು ಈಜಿಪ್ಟನ್ನು ಶಿಕ್ಷಿಸಿದನು. ಆತನು ಕೋಲ
ನ್ನೆತ್ತಿ ಸಮುದ್ರ ಮಾರ್ಗವಾಗಿ ತನ್ನ ಜನರನ್ನು ಈಜಿಪ್ಟಿನಿಂದ
ಹೊರ ನಡಿಸಿದನು. ಅದೇ ರೀತಿಯಲ್ಲಿ ಅಶ್ಶೂರದಿಂದ
ಯೆಹೋವನು ತನ್ನ ಜನರನ್ನು ರಕ್ಷಿಸಿ ಬಿಡಿಸುವನು.
[27]ಅಶ್ಶೂರವು ನಿಮಗೆ ಸಂಕಟವನ್ನು ಉಂಟು ಮಾಡು
ವದು. ಅದು ನಿಮಗೆ ನಿತ್ಯವೂ ಹೊರುವ ಭಾರವಾಗಿ
ಪರಿಣಮಿಸುವದು. ನಿಮ್ಮ ಹೆಗಲಿನ ಮೇಲೆ ನೊಗವನ್ನು
ಹಾಕುವದು. ಆದರೆ ಅದು ತೆಗೆದುಹಾಕಲ್ಪಡುವದು.
ಅದು ನಿನ್ನ ದೇವರ ಶಕ್ತಿಯಿಂದ ಮುರಿಯ
ಲ್ಪಡುವದು.

### ಅಶ್ಶೂರದ ಸೈನ್ಯವು ಇಸ್ರೇಲನ್ನು ಮುತ್ತಿತು

[28]ಸೈನಿಕರು ಅಯ್ಯಾಥಿನ ಮೇಲೆ ಬಂದಿದ್ದಾರೆ;
ಮಿಗ್ರೋನನ್ನು ಹಾದು ಹೋಗಿದ್ದಾರೆ. ಮಿಕ್ಮಾಷಿನಲ್ಲಿ
ತಮ್ಮ ಉಪಕರಣಗಳನ್ನಿಟ್ಟಿರುತ್ತಾರೆ. [29]ಸೈನಿಕರು ಮಾಬರ
ಎಂಬ ಸ್ಥಳದಲ್ಲಿ ದಾಟುತ್ತಾರೆ. ಗೆಬ ಎಂಬಲ್ಲಿ ಮಲಗು
ವರು. ಆಗ ರಾಮಾವು ಭಯಪಡುವದು. ಸೌಲನ
ಗಿಬೆಯದ ಜನರು ಪಲಾಯನ ಮಾಡುವರು.
[30]ಬಾತ್‌ಗಲ್ಲೀಮ್‌ನವರೇ, ಚೀರಾಡಿರಿ. ಲಯೆಷವೇ,
ಕೇಳು. ಅನಾತೋತೇ ನನಗೆ ಉತ್ತರ ಕೊಡು. [31]ಮದ್ಮೇ
ನಾದ ಜನರು ಓಡಿಹೋಗುತ್ತಿದ್ದಾರೆ. ಗೇಬೀಮಿನ
ಜನರು ಅವಿತುಕೊಂಡಿದ್ದಾರೆ. [32]ಈ ದಿವಸ ನೋಬಿನಲ್ಲಿ
ಸೈನ್ಯವು ತಂಗುವದು. ಜೆರುಸಲೇಮಿನ ಪರ್ವತವಾಗಿರುವ
ಚೀಯೋನ್ ಪರ್ವತಕ್ಕೆ ವಿರುದ್ಧವಾಗಿ ಯುದ್ಧಮಾಡಲು
ಸೈನ್ಯವು ಸಿದ್ಧವಾಗುವುದು.
[33]ನಮ್ಮ ಸರ್ವಶಕ್ತನೂ ಒಡೆಯನೂ ಆಗಿರುವ
ಯೆಹೋವನು ಆ ದೊಡ್ಡ ಮರವನ್ನು (ಅಶ್ಶೂರವನ್ನು)
ಕಡಿದು ಹಾಕುವದನ್ನು ನೋಡು! ತನ್ನ ಮಹಾಶಕ್ತಿಯಿಂದ
ಆತನು ಮಹಾವೀರರೂ ದೊಡ್ಡಜನರೂ ಎನ್ನದೆ ಎಲ್ಲ
ರನ್ನೂ ಕಡಿದು ಹಾಕುವನು. ಇನ್ನು ಮೇಲೆ ಅವರು ಮಹಾ
ಜನರೆಂದು ಕರೆಯಲ್ಪಡರು. [34]ಯೆಹೋವನು ತನ್ನ
ಕೊಡಲಿಯಿಂದ ಅಡವಿಯನ್ನು ಕಡಿದುಹಾಕುವನು.

ಲೆಬನೋನಿನ ಉನ್ನತ ಮರಗಳು (ಪ್ರಮುಖರು)
ಉರುಳಿ ಬೀಳುವವು.

### ಸಮಾಧಾನದ ಅರಸನು ಬರುವನು

11 ಇಷಯನ ಕಾಂಡದಿಂದ ಒಂದು ಚಿಗುರು ಒಡೆ
ಯುವುದು. ಆ ಕೊಂಬೆಯು ಇಷಯನ ಬೇರಿ
ನಿಂದ ಬೆಳೆಯುವುದು.
2 ಯೆಹೋವನ ಆತ್ಮವು ಆತನಲ್ಲಿದ್ದು, ಜ್ಞಾನ, ತಿಳುವ
ಳಿಕೆ, ಮಾರ್ಗದರ್ಶನ ಮತ್ತು ಸಾಮರ್ಥ್ಯವನ್ನು ದಯ
ಪಾಲಿಸುವದು; ಯೆಹೋವನನ್ನು ತಿಳಿದುಕೊಳ್ಳಲು ಮತ್ತು
ಗೌರವಿಸಲು ಆ ಮಗುವಿಗೆ ಸಹಾಯಿಸುವುದು. 3 ಆತನು
ಯೆಹೋವನನ್ನು ಸನ್ಮಾನಿಸುತ್ತಾ ಸಂತೋಷಿಸುವನು.
ಆತನು ಜನರಿಗೆ ನ್ಯಾಯತೀರಿಸುವುದು ಹೊರ ತೋರಿ
ಕೆಯ ಆಧಾರದ ಮೇಲಲ್ಲ; ಕೇಳಿಕೊಂಡದ್ದರ ಆಧಾರದ
ಮೇಲೂ ಅಲ್ಲ. 4-5 ಆತನು ಬಡಜನರಿಗೆ ಅನ್ಯಾಯ
ಮಾಡದೆ ನ್ಯಾಯವಾದ ತೀರ್ಪನ್ನು ಕೊಡುವನು. ದೇಶದ
ಬಡಜನರಿಗೋಸ್ಕರವಾಗಿ ಮಾಡುವ ಆಲೋಚನೆಯನ್ನು
ಪಕ್ಷಪಾತವಿಲ್ಲದೆ ಮಾಡುವನು. ಆತನು ಜನರಿಗೆ ಶಿಕ್ಷೆ
ಕೊಡಬೇಕೆಂದು ತೀರ್ಮಾನಿಸಿದರೆ ಅದನ್ನು ಆಜ್ಞಾಪಿಸಿ
ಶಿಕ್ಷಿಸುವನು. ದುಷ್ಟರಿಗೆ ಮರಣ ದಂಡನೆಯಾಗ
ಬೇಕೆಂದು ಆತನು ತೀರ್ಮಾನಿಸಿದರೆ, ಆತನು ಆಜ್ಞಾಪಿಸಿ
ಕೊಲ್ಲಿಸುವನು. ಒಳ್ಳೆಯತನವು ಮತ್ತು ನ್ಯಾಯವು ಆತನಿಗೆ
ಸೊಂಟಪಟ್ಟಿಯಾಗಿವೆ.
6 ಆ ಸಮಯದಲ್ಲಿ ತೋಳಗಳು ಕುರಿಮರಿಯೊಂದಿಗೆ
ಸಮಾಧಾನದಿಂದ ಒಟ್ಟಾಗಿ ವಾಸಿಸುವವು. ಹುಲಿಯು
ಆಡಿನ ಮರಿಗಳೊಂದಿಗೆ ಮಲಗಿಕೊಳ್ಳುವದು. ಕರುಗಳು,
ಸಿಂಹಗಳು, ಹೋರಿಗಳು ಒಟ್ಟಾಗಿ ಸಮಾಧಾನದಿಂದ
ಜೀವಿಸುವವು. ಒಂದು ಚಿಕ್ಕ ಮಗು ಅವುಗಳನ್ನು
ನಡಿಸುವುದು. 7 ದನಗಳೂ ಕರಡಿಗಳೂ ಜೊತೆಯಾಗಿರು
ವವು. ಅವುಗಳ ಮರಿಗಳೆಲ್ಲಾ ಒಂದಕ್ಕೊಂದು ಹಾನಿ
ಮಾಡದೆ ಒಟ್ಟಾಗಿ ಮಲಗಿಕೊಳ್ಳುವವು. ಸಿಂಹಗಳು ದನಗ
ಳಂತೆ ಹುಲ್ಲು ತಿನ್ನುವವು. ಹಾವುಗಳು ಸಹ ಜನರಿಗೆ ಹಾನಿ
ಮಾಡುವದಿಲ್ಲ. 8 ಮಗುವು ನಾಗರಹಾವಿನ ಹುತ್ತದ ಬಳಿ
ಆಡುತ್ತಾ ಹುತ್ತದೊಳಗೆ ಕೈಹಾಕುವದು.
9 ಯಾರೂ ಪರಸ್ಪರ ಹಾನಿಮಾಡುವದಿಲ್ಲ. ನನ್ನ ಪವಿತ್ರ
ಪರ್ವತದಲ್ಲಿನ ಜನರು ವಸ್ತುಗಳನ್ನು ನಾಶಮಾಡಲು
ಇಷ್ಟಪಡುವದಿಲ್ಲ. ಯಾಕೆಂದರೆ ಆಗ ಜನರು ನಿಜವಾ
ಗಿಯೂ ಯೆಹೋವನನ್ನು ಅರಿತಿರುವರು. ಸಾಗರದಲ್ಲಿ
ನೀರು ತುಂಬಿದಂತೆ ಲೋಕವೆಲ್ಲಾ ಆತನ ವಿಷಯವೆಂಬ
ಜ್ಞಾನದಿಂದ ತುಂಬುವದು.
10 ಆ ಸಮಯದಲ್ಲಿ ಇಷಯನ ವಂಶದಿಂದ ಒಬ್ಬ
ವಿಶೇಷ ವ್ಯಕ್ತಿಯು ಹುಟ್ಟುವನು. ಆತನು ಒಂದು ಧ್ವಜ
ದಂತಿರುವನು. ಎಲ್ಲಾ ಜನಾಂಗಗಳು ಆತನ ಸುತ್ತಲೂ
ಸೇರಿಬರಬೇಕೆಂದು ಈ ಧ್ವಜವು ತೋರಿಸುವುದು. ಆ
ಜನಾಂಗಗಳು ತಾವು ಏನು ಮಾಡಬೇಕೆಂದು ಕೇಳುವರು.
ಆತನಿರುವ ಸ್ಥಳವು ಮಹಿಮೆಯಿಂದ ತುಂಬುವದು.
11 ಆ ಸಮಯದಲ್ಲಿ ನನ್ನ ಒಡೆಯನು ಎರಡನೆ ಸಾರಿ
ಕೈಚಾಚಿ, ಉಳಿದ ತನ್ನ ಜನರನ್ನು ತೆಗೆದುಕೊಳ್ಳುವನು.
ಇವರು ಅಶ್ಶೂರ, ಉತ್ತರ ಈಜಿಪ್ಟ್, ದಕ್ಷಿಣ ಈಜಿಪ್ಟ್,
ಇಥಿಯೋಪ್ಯ, ಏಲಾಮ್, ಬಾಬಿಲೋನಿಯ , ಹಮಾಥ್
ಮತ್ತು ಭೂಲೋಕದ ದೂರದ ಪ್ರದೇಶಗಳಲ್ಲಿರುವ
ಎಲ್ಲಾ ಜನಾಂಗಗಳವರು.
12 ದೇವರು ಜನಾಂಗಗಳಿಗೆ ಒಂದು ಗುರುತಾಗಿ ಧ್ವಜವ
ನ್ನೆತ್ತುವನು. ಇಸ್ರೇಲ್ ಮತ್ತು ಯೆಹೂದದ ಜನರು ತಮ್ಮ
ಸ್ಥಳಗಳಿಂದ ಕಡ್ಡಾಯವಾಗಿ ತೆಗೆದುಹಾಕಲ್ಪಡುವರು. ಆ
ಜನರು ಪ್ರಪಂಚದ ಬಹುದೂರದ ಸ್ಥಳಗಳಿಗೆ ಚದರಿ
ಹೋಗುವರು. ಆದರೆ ದೇವರು ಅವರನ್ನು ಒಟ್ಟಾಗಿ
ಸೇರಿಸುವನು.
13 ಆ ಸಮಯದಲ್ಲಿ ಎಫ್ರಾಯೀಮು ಯೆಹೂದದ
ಮೇಲೆ ಹೊಟ್ಟೆಕಿಚ್ಚುಪಡುವುದಿಲ್ಲ. ಯೆಹೂದಕ್ಕೆ ವೈರಿಗಳಿ
ರುವದಿಲ್ಲ ಮತ್ತು ಎಫ್ರಾಯೀಮನಿಗೆ ಯೆಹೂದವು
ತೊಂದರೆಯನ್ನು ಮಾಡುವದಿಲ್ಲ.
14 ಆದರೆ ಎಫ್ರಾಯೀಮ್ಯರು ಮತ್ತು ಯೆಹೂದ್ಯರು
ಒಟ್ಟು ಸೇರಿ ಫಿಲಿಷ್ಟಿಯರನ್ನು ಎದುರಿಸುವರು. ನೆಲದ
ಮೇಲೆ ಇರುವ ಸಣ್ಣ ಪ್ರಾಣಿಯನ್ನು ಹಿಡಿಯಲು ಆಕಾಶ
ದಿಂದ ಬರುವ ಹಕ್ಕಿಗಳಂತೆ ಈ ಎರಡು ರಾಷ್ಟ್ರಗಳಿರುವವು.
ಅವರು ಒಟ್ಟಾಗಿ ಪೂರ್ವದ ಜನರ ಐಶ್ವರ್ಯವನ್ನು ಕಿತ್ತು
ಕೊಳ್ಳುವರು. ಎಫ್ರಾಯೀಮ್ ಮತ್ತು ಯೆಹೂದಗಳು
ಎದೋಮನ್ನು, ಮೋವಾಬನ್ನು ಮತ್ತು ಅಮ್ಮೋನ್‌ನನ್ನು
ತಮ್ಮ ಹತೋಟಿಯಲ್ಲಿಟ್ಟುಕೊಳ್ಳುವವು.
15 ಯೆಹೋವನು ಸಿಟ್ಟುಗೊಂಡು ಈಜಿಪ್ಟಿನ ಸಮುದ್ರ
ವನ್ನು ವಿಂಗಡಿಸಿದನು. ಅದೇ ರೀತಿಯಲ್ಲಿ ಯೂಫ್ರೇ
ಟೀಸ್ ನದಿಯ ಮೇಲೆ ತನ್ನ ಕೈಯನ್ನು ಚಾಚುವನು.
ಆತನು ನದಿಯ ನೀರಿಗೆ ಹೊಡೆಯುವನು. ಆಗ ಅದು
ಏಳು ಚಿಕ್ಕ ನದಿಗಳಾಗಿ ಹರಿಯುವುದು. ಆ ನದಿಗಳು ಆಳ
ವಾಗಿರುವದಿಲ್ಲ. ಜನರು ತಮ್ಮ ಕೆರಗಳೊಂದಿಗೆ ದಾಟ
ಬಹುದು. 16 ಅಳಿದುಳಿದ ದೇವಜನರು ಅಶ್ಶೂರ ದೇಶ
ವನ್ನು ಬಿಡಲು ಒಂದು ಮಾರ್ಗವಿರುವದು. ಅದು
ದೇವರು ತನ್ನ ಜನರನ್ನು ಈಜಿಪ್ಟಿನಿಂದ ಬಿಡಿಸಿದ ಕಾಲ
ದಂತಿರುವುದು.

### ದೇವರಿಗೆ ಸ್ತೋತ್ರದ ಹಾಡು

12 ಆ ಸಮಯದಲ್ಲಿ ನೀನು ಹೀಗನ್ನುವೆ:
‘‘ಯೆಹೋವನೇ, ನಾನು ನಿನ್ನನ್ನು ಸ್ತುತಿಸುವೆ!

ನೀನು ನನ್ನ ಮೇಲೆ ಕೋಪಿಸಿಕೊಂಡಿರುವೆ. ಆದರೆ
ಈಗ ನೀನು ನನ್ನ ಮೇಲೆ ಕೋಪಗೊಳ್ಳಬೇಡ! ನಿನ್ನ
ಪ್ರೀತಿಯನ್ನು ನನ್ನ ಮೇಲೆ ತೋರಿಸು.''

2 ದೇವರು ನನ್ನನ್ನು ರಕ್ಷಿಸುತ್ತಾನೆ. ಆತನಲ್ಲಿ ಭರವಸ
ವಿಟ್ಟಿದ್ದೇನೆ. ಆದುದರಿಂದ ನಾನು ಭಯಪಡೆನು.
ಆತನು ನನ್ನನ್ನು ರಕ್ಷಿಸುತ್ತಾನೆ. ಯೆಹೋವನೇ ನನ್ನ
ಬಲವು. ಆತನು ನನ್ನನ್ನು ರಕ್ಷಿಸುತ್ತಾನೆ. ನಾನು
ಆತನಿಗೆ ಸ್ತೋತ್ರಗಾನ ಹಾಡುವೆನು.
3 ರಕ್ಷಣೆಯೆಂಬ ಬುಗ್ಗೆಯಿಂದ ನೀರನ್ನು ತೆಗೆ
ದುಕೋ. ಆಗ ನೀನು ಸಂತೋಷಗೊಳ್ಳುವೆ.
4 ಆಗ ನೀನು, ''ಯೆಹೋವನಿಗೆ ಸ್ತೋತ್ರವಾಗಲಿ,
ಅತನನ್ನು ಆರಾಧಿಸಿರಿ! ಆತನು ಮಾಡಿದ ಕಾರ್ಯ
ಗಳನ್ನು ಸಾರಿರಿ!'' ಎಂದು ಹೇಳುವೆ.
5 ಯೆಹೋವನಿಗೆ ಸ್ತೋತ್ರಗಾನ ಹಾಡಿರಿ. ಯಾಕೆಂ
ದರೆ ಆತನು ಮಹಾಕೃತ್ಯಗಳನ್ನು ನಡಿಸಿದ್ದಾನೆ.
ದೇವರ ಬಗ್ಗೆ ಎಲ್ಲರಿಗೂ ಪ್ರಕಟಿಸಿರಿ. ಇಡೀ
ಲೋಕಕ್ಕೆ ಸಾರಿರಿ. ಎಲ್ಲಾ ಜನರು ಇದನ್ನು
ತಿಳಿಯಲಿ.
6 ಚೀಯೋನಿನ ಜನರೇ, ಇದರ ವಿಷಯವಾಗಿ
ಹರ್ಷಧ್ವನಿ ಮಾಡಿರಿ. ಇಸ್ರೇಲರ ಪರಿಶುದ್ಧನು
ನಿಮ್ಮೊಂದಿಗೆ ಬಲವಾಗಿದ್ದಾನೆ. ಆದುದರಿಂದ
ಹರ್ಷಿಸು .

### ಬಾಬಿಲೋನಿಗೆ ದೇವರ ಸಂದೇಶ

13 ಆಮೋಚನ ಮಗನಾದ ಯೆಶಾಯನಿಗೆ
ಬಾಬಿಲೋನಿನ ಬಗ್ಗೆ ದೊರೆತ ದೈವಸಂದೇಶ;

2 ''ಬೋಳುಗುಡ್ಡದ ಮೇಲೆ ಧ್ವಜವನ್ನೆತ್ತಿರಿ. ಜನರನ್ನು
ಕರೆಯಿರಿ; ಕೈಸನ್ನೆ ಮಾಡಿರಿ; ದ್ವಾರಗಳ ಮೂಲಕ
ಪ್ರವೇಶಿಸಲು ಪ್ರಮುಖರಿಗೆ ಹೇಳಿರಿ.
3 ''ನಾನು ಅವರನ್ನು ಆ ಜನರಿಂದ ಪ್ರತ್ಯೇಕಿಸಿದ್ದೇನೆ;
ನಾನೇ ಅವರಿಗೆ ಆಜ್ಞಾಪಿಸುವೆನು; ನಾನು ಕೋಪ
ಗೊಂಡಿರುವುದರಿಂದ ಆ ಜನರನ್ನು ಶಿಕ್ಷಿಸಲು ನನ್ನ
ಉತ್ತಮವಾದ ಜನರನ್ನು ಒಟ್ಟಾಗಿ ಸೇರಿಸಿದ್ದೇನೆ.
ಉತ್ಸಾಹಶಾಲಿಗಳಾದ ನನ್ನ ಜನರ ಬಗ್ಗೆ ನಾನು
ಹೆಮ್ಮೆಪಡುತ್ತೇನೆ.
4 ''ಪರ್ವತಗಳಲ್ಲಿ ಒಂದು ದೊಡ್ಡ ಶಬ್ದ ಕೇಳಿಸುತ್ತದೆ.
ಆ ಶಬ್ದಕ್ಕೆ ಕಿವಿಗೊಡಿರಿ. ದೊಡ್ಡ ಜನಸಮೂಹದ
ಶಬ್ದದಂತೆ ಕೇಳಿಸುತ್ತದೆ. ಅನೇಕ ರಾಜ್ಯಗಳ ಜನರು
ಒಟ್ಟಾಗಿ ಸೇರುತ್ತಿದ್ದಾರೆ. ಸರ್ವಶಕ್ತನಾದ ದೇವರು
ತನ್ನ ಸೈನ್ಯವನ್ನು ಒಟ್ಟುಗೂಡಿಸುತ್ತಿದ್ದಾನೆ.

5 ಯೆಹೋವನೂ ಆ ಸೈನ್ಯವೂ ದೂರದಿಂದ ಬರು
ತ್ತಿದ್ದಾರೆ. ದಿಗಂತದ ಆಚೆಯಿಂದ ಅವರು ಬರುತ್ತಿ
ದ್ದಾರೆ. ತನ್ನ ಸಿಟ್ಟನ್ನು ಪ್ರದರ್ಶಿಸುವದಕೋಸ್ಕರ
ಯೆಹೋವನು ಈ ಸೈನ್ಯವನ್ನು ಉಪಯೋಗಿಸು
ವನು. ಈ ಸೈನ್ಯವು ಇಡೀ ಭೂಮಿಯನ್ನು ಹಾಳು
ಮಾಡುವುದು.''

6 ಯೆಹೋವನ ದಿನವು ಹತ್ತಿರವಾಗಿದೆ. ಆದುದರಿಂದ
ದುಃಖಿಸಿರಿ, ರೋಧಿಸಿರಿ. ವೈರಿಯು ಬಂದು ನಿಮ್ಮ
ಐಶ್ವರ್ಯವನ್ನು ಸೂರೆಮಾಡುವ ಸಮಯವು ಬರುತ್ತದೆ.
ಸರ್ವಶಕ್ತನಾದ ದೇವರು ಅದನ್ನು ನೆರವೇರಿಸುವನು.
7 ಜನರು ತಮ್ಮ ಧೈರ್ಯವನ್ನು ಕಳೆದುಕೊಳ್ಳುವರು. ಭಯ
ದಿಂದ ಬಲಹೀನರಾಗುವರು. 8 ಪ್ರತಿಯೊಬ್ಬರೂ ಭಯ
ಪೀಡಿತರಾಗುವರು. ಪ್ರಸವವೇದನೆಯಿಂದ ನರಳುವ
ಹೆಂಗಸಿನಂತೆ ಅವರ ಹೊಟ್ಟೆಯಲ್ಲಿ ನೋವು ಉಂಟಾಗು
ವದು; ಅವರ ಮುಖಗಳು ಬೆಂಕಿಯಂತೆ ಕೆಂಪಗಾಗುವವು.
ಭಯದ ಮುಖವು ತಮ್ಮ ನೆರೆಯವರಲ್ಲಿಯೂ ಇರು
ವದನ್ನು ನೋಡಿ ಜನರು ಆಶ್ಚರ್ಯಪಡುವರು.

### ಬಾಬಿಲೋನಿನ ವಿರುದ್ಧವಾಗಿ ದೇವರ ತೀರ್ಪು

9 ಇಗೋ, ಯೆಹೋವನ ದಿನವು ಬರುತ್ತಿದೆ. ಅದು
ಭಯಂಕರವಾದ ದಿನವಾಗಿದೆ. ದೇವರು ಅತ್ಯಂತ ಕೋಪ
ದಿಂದ ದೇಶವನ್ನೆಲ್ಲಾ ನಾಶಮಾಡುವನು; ದುಷ್ಟಜನರ
ನ್ನೆಲ್ಲಾ ದೇಶವನ್ನು ಬಿಟ್ಟು ಹೋಗುವಂತೆ ಮಾಡುವನು.
10 ಆಕಾಶವು ಕತ್ತಲಾಗುವದು; ಸೂರ್ಯ, ಚಂದ್ರ,
ನಕ್ಷತ್ರಾದಿಗಳು ಪ್ರಕಾಶವನ್ನು ಕಳೆದುಕೊಳ್ಳುವವು.
11 ದೇವರು ಹೇಳುವದೇನೆಂದರೆ: ''ಈ ಪ್ರಪಂಚಕ್ಕೆ
ನಾನು ಕೆಡುಕನ್ನು ಉಂಟುಮಾಡುವೆನು. ದುಷ್ಟಜನರನ್ನು
ಅವರ ಪಾಪಗಳಿಗಾಗಿ ನಾನು ಶಿಕ್ಷಿಸುವೆನು. ಅಹಂಕಾರಿ
ಗಳು ಗರ್ವವನ್ನು ಕಳೆದುಕೊಳ್ಳುವಂತೆ ಮಾಡುವೆನು;
ಕ್ರೀಳು ಜನರ ಹೊಗಳಿಕೆಗಳನ್ನು ನಿಲ್ಲಿಸುವೆನು. 12 ಬಂಗಾ
ರವು ಯಾವ ರೀತಿಯಲ್ಲಿ ಅಪರೂಪವಾಗಿ ದೊರಕು
ವದೋ, ಅದೇ ಪ್ರಕಾರ ದೇಶದಲ್ಲಿ ಬಹು ಸ್ವಲವೇ ಜನರು
ಉಳಿಯುವದರಿಂದ ಅವರು ನೋಡಸಿಗುವದೇ ಅಪ
ರೂಪ. ಅಂಥವರು ಚೊಕ್ಕಬಂಗಾರಕ್ಕಿಂತಲೂ ಬೆಲೆ
ಬಾಳುವರು. 13 ನನ್ನ ಕೋಪದಿಂದ ಆಕಾಶವನ್ನು ನಡುಗಿ
ಸುವೆನು. ಭೂಮಿಯನ್ನು ಕದಲಿಸುವೆನು.''
ಸರ್ವಶಕ್ತನಾದ ದೇವರು ತನ್ನ ಮಹಾಕೋಪವನ್ನು
ಪ್ರದರ್ಶಿಸುವ ದಿನದಲ್ಲಿ ಅದು ನೆರವೇರುವುದು. 14 ಆಗ
ಗಾಯಗೊಂಡ ಜಿಂಕೆಯಂತೆ ಬಾಬಿಲೋನು ಓಡಿ

ಹೋಗುವದು. ಅವರು ಕುರುಬನಿಲ್ಲದ ಕುರಿಗಳಂತೆ
ಚದರಿ ಹೋಗುವರು. ಪ್ರತಿಯೊಬ್ಬನು ಹಿಂದಿರುಗಿ ತನ್ನ
ದೇಶಕ್ಕೂ ತನ್ನ ಜನರ ಬಳಿಗೂ ಓಡುವನು. 15 ಆದರೆ
ಶತ್ರುವು ಬಾಬಿಲೋನಿನವರನ್ನು ಹಿಂದಟ್ಟಿಕೊಂಡು
ಹೋಗುವನು. ಶತ್ರುವು ಅವನನ್ನು ಹಿಡಿದು ತನ್ನ ಕತ್ತಿ
ಯಿಂದ ಕೊಲ್ಲುವನು. 16 ಅವರ ಮನೆಯಲ್ಲಿರುವ ಎಲ್ಲಾ
ವಸ್ತುಗಳನ್ನು ಕಿತ್ತುಕೊಳ್ಳುವರು; ಅವರ ಹೆಂಡತಿಯರನ್ನು
ಬಲಾತ್ಕಾರದಿಂದ ಸಂಭೋಗಿಸುವರು; ಅವರ ಮಕ್ಕಳನ್ನು
ಜನರ ಕಣ್ಣೆದುರಿನಲ್ಲಿಯೇ ಹೊಡೆದು ಸಾಯಿಸುವರು.

17 ದೇವರು ಹೇಳುವದೇನೆಂದರೆ: ‘‘ಮೇದ್ಯದ ಸೈನ್ಯವು
ಬಾಬಿಲೋನನ್ನು ಮುತ್ತುವಂತೆ ಮಾಡುವೆನು. ಮೇದ್ಯದ
ಸೈನ್ಯಕ್ಕೆ ಬೆಳ್ಳಿ ಬಂಗಾರ ಸುರಿಸಿದರೂ ಅದು ಬಾಬಿಲೋ
ನಿನ ಮೇಲೆ ದಾಳಿ ಮಾಡುವದನ್ನು ನಿಲ್ಲಿಸುವದಿಲ್ಲ.
18 ಸೈನಿಕರು ಬಾಬಿಲೋನಿನ ಯುವಕರನ್ನು ಹಿಡಿದು
ಕೊಲ್ಲುವರು. ಶಿಶುಗಳಿಗೂ ದಯೆತೋರುವುದಿಲ್ಲ;
ಮಕ್ಕಳಿಗೆ ಕರುಣೆ ತೋರುವುದಿಲ್ಲ. ಬಾಬಿಲೋನು
ಸೊದೋಮ್ ಗೊಮೋರಗಳಂತೆ ನಾಶವಾಗುವದು.
ದೇವರೇ ಇದನ್ನು ಮಾಡುವನು. ಆಗ ಅಲ್ಲಿ ಏನೂ
ಉಳಿಯದು.

19 ಎಲ್ಲಾ ರಾಜ್ಯಗಳಿಗಿಂತ ಬಾಬಿಲೋನ್ ಬಹಳ
ಸುಂದರವಾಗಿದೆ. ಬಾಬಿಲೋನಿಯರು ತಮ್ಮ ನಗರದ
ಬಗ್ಗೆ ತುಂಬಾ ಹೆಚ್ಚಳಪಡುತ್ತಾರೆ. 20 ಆದರೆ ಬಾಬಿ
ಲೋನ್ ಇನ್ನು ಮುಂದೆ ಸುಂದರವಾಗಿರದು. ಮುಂದಿನ
ದಿವಸಗಳಲ್ಲಿ, ಜನರು ಅಲ್ಲಿ ವಾಸಿಸರು. ಅರಬ್ಬಿಯರು
ತಮ್ಮ ಗುಡಾರಗಳನ್ನು ಅಲ್ಲಿ ಹಾಕುವದಿಲ್ಲ. ಕುರುಬರು
ತಮ್ಮ ಮಂದೆಯನ್ನು ಮೇಯಿಸಲು ಅಲ್ಲಿಗೆ ಬರುವದಿಲ್ಲ.
21 ಅಲ್ಲಿ ಮರುಭೂಮಿಯ ಕಾಡು ಪ್ರಾಣಿಗಳು ಮಾತ್ರವೇ
ವಾಸಿಸುವವು ಜನರು ಬಾಬಿಲೋನಿನಲ್ಲಿರುವ ತಮ್ಮ ಮನೆ
ಗಳಲ್ಲಿ ವಾಸಿಸುವದಿಲ್ಲ. ಅವರ ಮನೆಗಳಲ್ಲಿ ಗೂಬೆಗಳು
ಮತ್ತು ದೊಡ್ಡ ಪಕ್ಷಿಗಳು ವಾಸಮಾಡುವವು. ಕಾಡುಮೇಕೆ
ಗಳು ಮನೆಯೊಳಗೆ ಆಡುವವು. 22 ಕಾಡುನಾಯಿ ಮತ್ತು
ತೋಳಗಳು ಬಾಬಿಲೋನಿನ ಭವ್ಯಭವನಗಳೊಳಗಿಂದ
ಅರಚುವವು. ಬಾಬಿಲೋನ್ ಕೊನೆಗೊಳ್ಳುವುದು.
ಅದರ ಅಂತ್ಯವು ಸಮೀಪದಲ್ಲಿಯೇ ಇದೆ. ಅದರ ಪೂರ್ಣ
ನಾಶನಕ್ಕಾಗಿ ನಾನು ಇನ್ನು ಹೆಚ್ಚು ಹೊತ್ತು
ಕಾಯುವದಿಲ್ಲ.’’

## ಇಸ್ರೇಲರು ಸ್ವದೇಶಕ್ಕೆ ಹಿಂದಿರುಗುವರು

14 ಮುಂದಿನ ದಿವಸಗಳಲ್ಲಿ ಯೆಹೋವನು
ಯಾಕೋಬನ ಮೇಲೆ ಮತ್ತೆ ಪ್ರೀತಿತೋರು
ವನು. ಯೆಹೋವನು ಮತ್ತೆ ಇಸ್ರೇಲರನ್ನು ಆರಿಸುವನು.
ಆ ಸಮಯದಲ್ಲಿ ಅವರ ದೇಶವನ್ನು ಅವರಿಗೆ ಹಿಂತಿರು
ಗಿಸುವನು. ಆಗ ಯೆಹೂದ್ಯರಲ್ಲದವರು ಯೆಹೂದ್ಯ
ರೊಂದಿಗೆ ಸೇರಿಕೊಳ್ಳುವರು. ಅವರೆಲ್ಲರೂ ಒಂದೇ ವಂಶ
ದವರಾಗುವರು. ಅದು ಯಾಕೋಬನ ವಂಶ. 2 ಆ
ಜನಾಂಗಗಳವರು ಇಸ್ರೇಲರನ್ನು ಇಸ್ರೇಲ್ ದೇಶಕ್ಕೆ
ನಡಿಸುವರು. ಆ ಪರಜನಾಂಗಗಳ ಗಂಡಸರು ಹೆಂಗಸರು
ಇಸ್ರೇಲರ ಗುಲಾಮರಾಗಿರುವರು. ಹಿಂದಿನ ದಿವಸಗಳಲ್ಲಿ
ಆ ಜನರು ಇಸ್ರೇಲರನ್ನು ಬಲವಂತದಿಂದ ತಮ್ಮ
ಗುಲಾಮರನ್ನಾಗಿ ಮಾಡಿದರು. ಆದರೆ ಈಗ ಇಸ್ರೇಲರು
ಆ ಜನಾಂಗಗಳನ್ನು ಸೋಲಿಸಿ ಅವರನ್ನು ಆಳುವರು.
3 ಯೆಹೋವನು ನಿಮ್ಮ ಪ್ರಯಾಸವನ್ನು ನಿವಾರಿಸಿ
ನಿಮ್ಮನ್ನು ಆದರಿಸುವನು. ಹಿಂದಿನ ದಿವಸಗಳಲ್ಲಿ ನೀವು
ಗುಲಾಮರಾಗಿರುವಾಗ ಜನರು ನಿಮ್ಮನ್ನು ಬಹಳವಾಗಿ
ಹಿಂಸಿಸಿದರು; ಬಲವಂತದಿಂದ ಕಷ್ಟಕರವಾದ ಕೆಲಸವನ್ನು
ನಿಮ್ಮಿಂದ ಮಾಡಿಸಿದರು. ಆದರೆ ಯೆಹೋವನು ಆ
ಸಂಕಟಗಳಿಂದ ನಿಮ್ಮನ್ನು ಪಾರುಮಾಡುವನು.

## ಬಾಬಿಲೋನಿನ ಅರಸನ ಕುರಿತು ಹಾಡು

4 ಆ ಸಮಯದಲ್ಲಿ ಬಾಬಿಲೋನಿನ ಅರಸನ ಬಗ್ಗೆ ನೀವು
ಹೀಗೆ ಹಾಡುವಿರಿ:

ಅರಸನು ನಮ್ಮನ್ನಾಳುವಾಗ ಬಹಳ ಕ್ರೂರವಾಗಿ
ದ್ದನು. ಆದರೆ ಈಗ ಅವನ ಆಳ್ವಿಕೆಯು ಅಂತ್ಯ
ವಾಯಿತು.
5 ಯೆಹೋವನು ದುಷ್ಟ ಅರಸನ ರಾಜದಂಡವನ್ನು
ಮುರಿದುಹಾಕಿದನು. ಅವನ ಅಧಿಕಾರವನ್ನು
ತೆಗೆದುಹಾಕಿದನು.
6 ಬಾಬಿಲೋನಿನ ಅರಸನು ತನ್ನ ದುಷ್ಟತನದಲ್ಲಿ
ಜನರನ್ನು ಹೊಡೆಯಿಸಿದನು. ಹೊಡೆಯುವದನ್ನು
ಅವನು ನಿಲ್ಲಿಸಲೇ ಇಲ್ಲ. ಆ ದುಷ್ಟ ಅರಸನು ಜನ
ರನ್ನು ಸಿಟ್ಟಿನಿಂದಲೇ ಆಳಿದನು. ಜನರನ್ನು
ಹಿಂಸೆಪಡಿಸುವದನ್ನು ಅವನು ನಿಲ್ಲಿಸಲಿಲ್ಲ.
7 ಆದರೆ ಈಗ ಇಡೀ ರಾಜ್ಯದಲ್ಲಿ ವಿಶ್ರಾಂತಿ ಇದೆ.
ರಾಜ್ಯವು ಸಮಾಧಾನದಿಂದಿದೆ. ಜನರು ಸಂತೋಷ
ದಿಂದ ಇದನ್ನು ಆಚರಿಸುತ್ತಾರೆ.
8 ನೀನು ದುಷ್ಟ ಅರಸನಾಗಿದ್ದೆ, ಈಗ ನಿನಗೆ ಅಂತ್ಯವು
ಬಂತು. ತುರಾಯಿ ಮರಗಳೂ ಲೆಬನೋನಿನ
ದೇವದಾರು ವೃಕ್ಷಗಳೂ ಹರ್ಷಗೊಂಡಿವೆ. ಆ ಮರ
ಗಳು ಹೀಗೆ ಹೇಳುತ್ತಿವೆ: ಅರಸನು ನಮ್ಮನ್ನು ಕಡಿದು
ರುಳಿಸಿದನು. ಈಗ ಅರಸನೇ ಉರುಳಿಬಿದ್ದಿದ್ದಾನೆ.
ಅವನು ಮತ್ತೆಂದಿಗೂ ಏಳುವುದಿಲ್ಲ.
9 ನೀನು ಬರುವದರಿಂದ ಮರಣದ ಸ್ಥಳವಾಗಿರುವ

ನರಕವು ಉತ್ಸಾಹಗೊಂಡಿದೆ. ನಿನ್ನನ್ನು ಎದುರು
ಗೊಳ್ಳುವದಕ್ಕಾಗಿ ಪಾತಾಳವು ಲೋಕದ ಎಲ್ಲಾ
ಅಧಿಪತಿಗಳ ಆತ್ಮಗಳನ್ನು ಎಬ್ಬಿಸಿದೆ. ಅರಸರು
ತಮ್ಮ ಸಿಂಹಾಸನದಲ್ಲಿ ನಿಂತುಕೊಳ್ಳುವಂತೆ ಪಾತಾ
ಳವು ಮಾಡುತ್ತಿದೆ. ಅವರು ನಿನ್ನ ಬರುವಿಕೆಯನ್ನು
ಕಾಯುತ್ತಿದ್ದಾರೆ.
10 ‘‘ಈಗ ನೀನು ನಮ್ಮಂತೆಯೇ ಸತ್ತ ಶರೀರವಾಗಿ ರುವೆ.
ಈಗ ನೀನು ನಮ್ಮಂತೆಯೇ ಆಗಿರುವೆ.’’ ಎಂದು
ಅವರು ನಿನ್ನನ್ನು ಗೇಲಿಮಾಡುವರು.
11 ನಿನ್ನ ಜಂಬವು ಪಾತಾಳಕ್ಕೆ ಕಳುಹಿಸಲಾಗಿದೆ. ನಿನ್ನ
ಹಾರ್ಪ್‌ವಾದ್ಯದ ಸ್ವರವು ನಿನ್ನ ಅಹಂಕಾರದ ಆತ್ಮ
ವನ್ನು ಸಾರಿಹೇಳುತ್ತವೆ. ಹುಳುಗಳು ನಿನ್ನ ಶರೀರ
ವನ್ನು ತಿಂದುಬಿಡುವವು. ಹಾಸಿಗೆಯೋ ಎಂಬಂತೆ
ನೀನು ಅವುಗಳ ಮೇಲೆ ಮಲಗಿಕೊಳ್ಳುವೆ. ಹುಳು
ಗಳು ನಿನ್ನ ಶರೀರವನ್ನು ಕಂಬಳಿಯಂತೆ ಮುಚ್ಚಿ
ಕೊಳ್ಳುವವು.
12 ನೀನು ಉದಯ ನಕ್ಷತ್ರದಂತೆ ಇರುವೆ. ಆದರೆ
ನೀನು ಆಕಾಶದಿಂದ ಕೆಳಗೆ ಬಿದ್ದಿರುವೆ. ಹಿಂದಿನ
ಕಾಲದಲ್ಲಿ ಲೋಕದ ಎಲ್ಲಾ ರಾಜ್ಯಗಳು ನಿನಗೆ ಅಡ್ಡ
ಬಿದ್ದವು. ಆದರೆ ಈಗ ನೀನು ಉರುಳಿಸಲ್ಪಟ್ಟಿರುವೆ.
13 ನೀನು ಯಾವಾಗಲೂ ನಿನ್ನೊಳಗೆ, ‘‘ನಾನು ಉನ್ನತ
ವಾದ ಆಕಾಶಕ್ಕೆ ಹೋಗುವೆನು. ನಾನು ದೇವರ
ನಕ್ಷತ್ರಗಳಿಗಿಂತ ಮೇಲೆ ನನ್ನ ಸಿಂಹಾಸನವನ್ನು
ಸ್ಥಾಪಿಸುವೆನು. ನಾನು ಜಾಫೊನ್ ಎಂಬ ಪವಿತ್ರ
ಪರ್ವತದಲ್ಲಿ ಕುಳಿತುಕೊಳ್ಳುವೆನು. ಆ ಪರ್ವತದಲ್ಲಿ
ನಾನು ದೇವರುಗಳನ್ನು ಸಂಧಿಸುವೆನು.
14 ನಾನು ಮೇಘಮಂಡಲದ ಮೇಲೆ ಏರಿ ಉನ್ನ
ತೋನ್ನತನಿಗೆ ಸರಿಸಮಾನನಾಗುತ್ತಾನೆ’’ ಎಂದು
ಕೊಳ್ಳುತ್ತಿದ್ದೆ.
15 ಆದರೆ ಅದು ಸಂಭವಿಸಲಿಲ್ಲ. ನೀನು ಆಕಾಶಕ್ಕೆ
ದೇವರೊಂದಿಗೆ ಹೋಗಲಿಲ್ಲ. ನೀನು ಆಳವಾದ
ಗುಂಡಿಗೆ ದಬ್ಬಲ್ಪಟ್ಟೆ. ಮರಣಸ್ಥಳವಾಗಿರುವ
ಪಾತಾಳಕ್ಕೆ ನೀನು ದಬ್ಬಲ್ಪಟ್ಟೆ.
16 ನಿನ್ನನ್ನು ನೋಡುವ ಜನರು ನಿನ್ನ ಬಗ್ಗೆ ಯೋಚಿಸು
ವರು. ನೀನು ಕೇವಲ ಸತ್ತ ಹೆಣವೆಂದು ತಿಳಿದು,
‘‘ಭೂಮಿಯ ಮೇಲಿನ ರಾಜ್ಯಗಳಲ್ಲಿ ಮಹಾಭೀತಿ
ಯನ್ನುಂಟು ಮಾಡಿದವನು ಇವನೋ?
17 ನಗರಗಳನ್ನು ನಾಶಮಾಡಿ ಭೂಮಿಯನ್ನು ಬೆಂಗಾ
ಡನ್ನಾಗಿ ಮಾಡಿದವನು ಇವನೋ? ಯುದ್ಧದಲ್ಲಿ
ಜನರನ್ನು ಸೆರೆಹಿಡಿದು ಅವರ ಮನೆಗಳಿಗೆ ಹಿಂದಿರು
ಗುವಂತೆ ಮಾಡಿದವನು ಇವನೋ?’’ ಎಂದು
ಕೇಳುವರು.
18 ಭೂಲೋಕದ ಪ್ರತಿಯೊಬ್ಬ ಅರಸನು ಮಹಿಮೆ
ಯೊಂದಿಗೆ ಕಾಲವಾದನು. ಪ್ರತಿಯೊಬ್ಬ ಅರಸನಿಗೆ
ಸ್ವಂತ ಸಮಾಧಿ ಇರುವದು.
19 ಆದರೆ ದುಷ್ಟ ಅರಸನಾದ ನೀನು ನಿನ್ನ ಸಮಾಧಿ
ಯಿಂದ ತೆಗೆದುಹಾಕಲ್ಪಟ್ಟಿರುವೆ. ಮರದಿಂದ
ಬೇರ್ಪಡಿಸಿದ ಕೊಂಬೆಯಂತೆ ನೀನಿರುವೆ. ಯುದ್ಧ
ದಲ್ಲಿ ಸತ್ತ ಸೈನಿಕನಂತೆ ನೀನಿರುವೆ. ಬೇರೆ ಸೈನಿಕರು
ಅವನ ಮೇಲೆ ನಡೆದಾಡುವರು. ಈಗ ನೀನು ಸಾಧಾ
ರಣ ಹೆಣದಂತೆ ಇರುವೆ. ಸಮಾಧಿಯ ಬಟ್ಟೆಗಳಿಂದ
ನೀನು ಸುತ್ತಲ್ಪಟ್ಟಿರುವೆ.
20 ಬೇರೆ ಅನೇಕ ಅರಸರು ಸತ್ತುಹೋದರು. ಅವರೆ
ಲ್ಲರಿಗೂ ಸ್ವಂತ ಸಮಾಧಿ ಇದೆ. ಆದರೆ ನೀನು ಅವ
ರೊಂದಿಗೆ ಸೇರಲಾರೆ. ಯಾಕೆಂದರೆ ನಿನ್ನ ರಾಜ್ಯ
ವನ್ನು ನೀನೇ ನಾಶಮಾಡಿರುವೆ. ನೀನು ನಿನ್ನ ಜನ
ರನ್ನೇ ಸಾಯಿಸಿರುವೆ. ಆದರೆ ನೀನು ನಾಶಮಾಡಿ
ದಂತೆ ನಾಶಮಾಡಲು ನಿನ್ನ ಮಕ್ಕಳಿಗೆ ಅವಕಾಶ
ಕೊಡಲಾಗದು.
21 ಅವನ ಮಕ್ಕಳನ್ನು ಕೊಲ್ಲಲು ಸಿದ್ಧಗೊಳ್ಳಿರಿ. ಅವರ
ತಂದೆಯ ದುಷ್ಟತನಕ್ಕಾಗಿ ಅವರನ್ನು ಕೊಲ್ಲಿರಿ.
ಅವನ ಮಕ್ಕಳು ದೇಶವನ್ನು ಇನ್ನೆಂದಿಗೂ ತಮ್ಮ
ವಶಕ್ಕೆ ತೆಗೆದುಕೊಳ್ಳಲಾರರು. ಅವರು ಪ್ರಪಂಚ
ವನ್ನು ಇನ್ನೆಂದಿಗೂ ತಮ್ಮ ಪಟ್ಟಣಗಳಿಂದ ತುಂಬಿಸ
ಲಾರರು.

22 ಸರ್ವಶಕ್ತನಾದ ಯೆಹೋವನು ಹೇಳುವುದೇ
ನೆಂದರೆ, ‘‘ನಾನು ಎದ್ದುನಿಂತು ಅವರಿಗೆ ವಿರುದ್ಧವಾಗಿ
ಹೋರಾಡುವೆನು. ನಾನು ಹೆಸರುವಾಸಿಯಾದ ಬಾಬಿ
ಲೋನ್ ನಗರವನ್ನು ನಾಶಮಾಡುವೆನು. ಬಾಬಿಲೋ
ನಿನ ಎಲ್ಲಾ ಜನರನ್ನು ನಾಶಮಾಡುವೆನು. ಅವರ ಮಕ್ಕ
ಳನ್ನು ಮತ್ತು ಮರಿಮಕ್ಕಳನ್ನು ನಾಶಮಾಡುವೆನು’’
ಯೆಹೋವನೇ ಈ ಮಾತುಗಳನ್ನು ನುಡಿದಿದ್ದಾನೆ.
23 ಯೆಹೋವನು ಹೇಳುವದೇನೆಂದರೆ: ‘‘ನಾನು
ಬಾಬಿಲೋನನ್ನು ಪ್ರಾಣಿಗಳ ವಾಸಸ್ಥಳವನ್ನಾಗಿ ಬದಲಾ
ಯಿಸುವೆನು. ಆ ಸ್ಥಳವು ಜವುಗು ನೆಲವಾಗಿರುವುದು.
ನಾಶನವೆಂಬ ಪೊರಕೆಯಿಂದ ಅದನ್ನು ಗುಡಿಸುವೆನು.’’
ಇದು ಸರ್ವಶಕ್ತನಾದ ಯೆಹೋವನ ನುಡಿ.

### ದೇವರು ಅಶ್ಶೂರವನ್ನು ಶಿಕ್ಷಿಸುವನು

24 ಸರ್ವಶಕ್ತನಾದ ಯೆಹೋವನು ಒಂದು ವಾಗ್ದಾನ
ವನ್ನು ಮಾಡಿದ್ದಾನೆ. ಆತನು ಹೇಳುವುದೇನೆಂದರೆ:
‘‘ನಾನು ಯೋಚಿಸಿದಂತೆಯೇ ಇವೆಲ್ಲವೂ ನೆರವೇರು
ವುದು ಎಂದು ನಿಮಗೆ ಖಂಡಿತವಾಗಿ ಹೇಳುತ್ತೇನೆ. 25 ನನ್ನ

ದೇಶದಲ್ಲಿ ಅಶ್ಶೂರದ ರಾಜನನ್ನು ನಾಶಮಾಡುವೆನು. ನನ್ನ ಪರ್ವತಗಳ ಮೇಲೆ ಆ ರಾಜನ ಮೇಲೆ ತುಳಿದು ಕೊಂಡು ನಡೆದಾಡುವೆನು. ಆ ರಾಜನು ನನ್ನ ಜನರನ್ನು ಗುಲಾಮರನ್ನಾಗಿ ಮಾಡಿದನು. ಅವರ ಹೆಗಲಿನ ಮೇಲೆ ನೊಗವನ್ನಿಟ್ಟನು. ಆ ನೊಗವು ಯೆಹೂದದ ಹೆಗಲಿನಿಂದ ತೆಗೆಯಲ್ಪಡುವದು. [26]ಹೀಗೆ ಮಾಡಲು ನಾನೇ ಆಲೋಚಿಸಿದ್ದೇನೆ. ನನ್ನ ಯೋಜನೆಯಂತೆಯೇ ಘಟನೆ ಗಳು ಸಂಭವಿಸುತ್ತವೆ. ನನ್ನ ಭುಜಬಲದಿಂದ ಜನಾಂಗ ಗಳನ್ನು ಶಿಕ್ಷಿಸುವೆನು.''

[27]ಯೆಹೋವನ ಈ ಸಂಕಲ್ಪವನ್ನು ತಡೆಯಲು ಯಾರಿಗೂ ಸಾಧ್ಯವಿಲ್ಲ. ಜನರನ್ನು ದಂಡಿಸಲು ಆತನು ಕೈಮೇಲಿತ್ತಿದ್ದಾಗ ಯಾರೂ ಆತನನ್ನು ತಡೆಯಲಾರರು.

### ಫಿಲಿಷ್ಟಿಯ ಕುರಿತು ದೈವ ಸಂದೇಶ

[28]ಅರಸನಾದ ಆಹಾಜನು ಸತ್ತ ವರುಷದಲ್ಲಿ ಈ ದುಃಖದ ಸಂದೇಶ ವು ಕೊಡಲ್ಪಟ್ಟಿತು .

[29]ಫಿಲಿಷ್ಟಿಯ ದೇಶವೇ, ನಿನ್ನನ್ನು ಹೊಡೆದ ಅರಸನು ಸತ್ತದ್ದಕ್ಕಾಗಿ ನೀನು ಸಂತೋಷಗೊಂಡಿರುವೆ. ಆದರೆ ನೀನು ಸಂತೋಷಗೊಳ್ಳಬಾರದು. ಅವನ ರಾಜ್ಯಭಾರವು ಅಂತ್ಯವಾಯಿತು ಎಂಬುದು ಸತ್ಯ. ಆದರೆ ಅರಸನ ಮಗನು ರಾಜ್ಯವಾಳುವನು. ಒಂದು ಹಾವು ಇನ್ನೊಂದು ಭಯಂಕರ ಹಾವನ್ನು ಹೆರುವಂತೆ ಅದು ಇರುವದು. ಈ ಹೊಸ ಅರಸನು ನಿಮಗೆ ವೇಗವಾದ ಮತ್ತು ಅಪಾಯಕರ ವಾದ ಹಾವಾಗುವನು. [30]ಆದರೆ ನನ್ನ ಬಡಜನರು ಸುರಕ್ಷಿತವಾಗಿ ಊಟ ಮಾಡುವರು. ಅವರ ಮಕ್ಕಳೂ ಸುರಕ್ಷಿತವಾಗಿರುವರು. ನನ್ನ ಬಡಜನರು ಹಾಯಾಗಿ ಮಲಗಿ ಸುರಕ್ಷಿತರಾಗಿರುವರು. ಆದರೆ ನಿಮ್ಮ ಕುಟುಂಬದವರು ಹಸಿವೆಯಿಂದ ಸಾಯುವಂತೆ ಮಾಡುವೆನು. ನಿಮ್ಮ ದೇಶದಲ್ಲಿ ಉಳಿದಿರುವ ಜನರೆಲ್ಲರೂ ಸಾಯುವರು.

31 ಮಹಾದ್ವಾರಗಳ ಬಳಿಯಲ್ಲಿರುವ ಜನರೇ, ಗೋಳಾಡಿರಿ! ಪಟ್ಟಣದೊಳಗಿರುವ ಜನರೇ, ಕೂಗಾಡಿರಿ! ಫಿಲಿಷ್ಟಿಯದಲ್ಲಿರುವವರೆಲ್ಲರೂ ಭಯಪಡುವರು. ನಿಮ್ಮ ಧೈರ್ಯವು ಮೇಣದಂತೆ ಕರಗಿ ಹೋಗುವದು. ಇಗೋ ಉತ್ತರ ದಿಕ್ಕಿನಲ್ಲಿ ಧೂಳು ಏಳುತ್ತಿದೆ. ಅಶ್ಶೂರದ ಸೈನ್ಯವು ಬರುತ್ತಿದೆ. ಅವರೆಲ್ಲರೂ ಬಲಶಾಲಿಗಳಾದ ವೀರರು.

32 ಆ ಸೈನ್ಯದವರು ತಮ್ಮ ದೇಶಕ್ಕೆ ಸಂದೇಶ ವಾಹಕರನ್ನು ಕಳುಹಿಸುತ್ತಾರೆ. ಆ ಸಂದೇಶವು ಏನಿರ ಬಹುದು? ''ಫಿಲಿಷ್ಟಿಯರು ಸೋತುಹೋದರು, ಆದರೆ ಯೆಹೋವನು ಚೀಯೋನನ್ನು ಬಲ ಪಡಿಸಿದ್ದಾನೆ. ಆತನ ಬಡಜನರು ರಕ್ಷಣೆಗಾಗಿ ಅಲ್ಲಿಗೆ ಹೋಗಿ ದ್ದಾರೆ'' ಎಂಬುದೇ ಆ ಸಂದೇಶ.

### ಮೋವಾಬಿನ ಕುರಿತು ದೈವಸಂದೇಶ

15 ಇದು ಮೋವಾಬನ್ನು ಕುರಿತ ದುಃಖಕರವಾದ ಸಂದೇಶ: ಒಂದು ರಾತ್ರಿ ಮೋವಾಬಿನ ಆರ್ ಪಟ್ಟಣದಿಂದ ಸಂಪತ್ತನ್ನು ಸೈನ್ಯವು ಸೂರೆ ಮಾಡಿತು. ಆ ರಾತ್ರಿ ನಗರವು ನಾಶಮಾಡಲ್ಪಟ್ಟಿತು. ಒಂದು ರಾತ್ರಿ ಸೈನ್ಯವು ಮೋವಾಬಿನ ಕೀರ್ ಪಟ್ಟಣದಿಂದ ಸಂಪತ್ತನ್ನು ಸೂರೆ ಮಾಡಿತು. ಆ ರಾತ್ರಿ ಪಟ್ಟಣವು ಕೆಡವಲ್ಪಟ್ಟಿತು.

2 ಅರಸನ ಪರಿವಾರದವರು ಮತ್ತು ದೀಬೋನಿನ ಜನರು ಪೂಜಾ ಸ್ಥಳಕ್ಕೆ ದುಃಖಿಸಲು ಹೋಗುತ್ತಿ ದ್ದಾರೆ. ಮೋವಾಬಿನ ಜನರು ನೆಬೋ ಮತ್ತು ಮೇದೆಬದವರಿಗಾಗಿ ರೋಧಿಸುತ್ತಾರೆ. ಜನರು ತಮ್ಮ ಗಡ್ಡಗಳನ್ನೂ ತಲೆಗಳನ್ನೂ ಬೋಳಿಸಿ ತಮ್ಮ ದುಃಖವನ್ನು ಪ್ರದರ್ಶಿಸುತ್ತಾರೆ.

3 ಮೋವಾಬಿನ ಎಲ್ಲಾ ಕಡೆಗಳಲ್ಲೂ ಮನೆಯ ಚಾವಣಿಯ ಮೇಲೂ ಬೀದಿಗಳಲ್ಲೂ ಜನರು ಕಪ್ಪು ಬಟ್ಟೆಗಳನ್ನು ಧರಿಸಿಕೊಂಡು ರೋಧಿಸುತ್ತಾರೆ.

4 ಹೆಷ್ಬೋನ್ ಮತ್ತು ಎಲೆಯಾಲೆಯಲ್ಲಿರುವ ಜನರು ಗಟ್ಟಿಯಾಗಿ ಅಳುತ್ತಿದ್ದಾರೆ. ದೂರದಲ್ಲಿ ರುವ ಯಹಜಿ ಪಟ್ಟಣದವರಿಗೆ ಅವರ ರೋಧನವು ಕೇಳಿಸುತ್ತದೆ. ಸೈನಿಕರೂ ಭಯಗೊಂಡಿದ್ದಾರೆ. ಹೆದರಿಕೆಯಿಂದ ನಡುಗುತ್ತಿದ್ದಾರೆ.

5 ಮೋವಾಬಿನ ಬಗ್ಗೆ ನನ್ನ ಹೃದಯವು ಮರುಗುತ್ತಿದೆ. ಜನರು ಸುರಕ್ಷತೆಗಾಗಿ ಅತ್ತಿತ್ತ ಓಡಾಡುತ್ತಿದ್ದಾರೆ. ಅವರು ಬಹುದೂರವಿರುವ ಚೋಮರಿಗೆ ಓಡುತ್ತಿ ದ್ದಾರೆ. ಎಗ್ಲತ್ ಶಿಲಿಶೀಯಾಕ್ಕೂ ಓಡುತ್ತಾರೆ. ಪರ್ವತಮಾರ್ಗವಾಗಿ ಲೂಹೀಥಿಗೆ ಹೋಗುತ್ತಿರು ವಾಗ ಜನರು ಅಳುತ್ತಾ ಹೋಗುತ್ತಾರೆ. ಹೊರೊನ ಯಿಮಿಗೆ ಹೋಗುವ ಮಾರ್ಗದಲ್ಲಿ ಜನರು ಜೋರಾಗಿ ಅಳುತ್ತಾ ಹೋಗುತ್ತಿದ್ದಾರೆ.

6 ಆದರೆ ನಿಮ್ರೀಮ್ ಹಳ್ಳವು ಒಣಗಿಹೋಗಿ ಮರು ಭೂಮಿಗೆ ಸಮಾನವಾಗಿದೆ. ಸಸಿಗಳೆಲ್ಲಾ ಸತ್ತಿವೆ; ಎಲ್ಲಿಯೂ ಹಸಿರು ಕಾಣಿಸುವದಿಲ್ಲ.

7 ಜನರು ತಮ್ಮ ವಸ್ತುಗಳನ್ನು ಒಟ್ಟಾಗಿ ಸೇರಿಸಿ ಮೋವಾಬನ್ನು ಬಿಟ್ಟುಹೋಗುತ್ತಿದ್ದಾರೆ. ಅವರು ತಮ್ಮ ವಸ್ತುಗಳನ್ನು ಹೊತ್ತುಕೊಂಡು ಪೊಪ್ಲಾರ್ ಹಳ್ಳದ ಬದಿಯಲ್ಲಿ ಗಡಿದಾಟುವರು.

8 ಮೋವಾಬ್ ದೇಶದಲ್ಲೆಲ್ಲಾ ಅಳುವ ಸದ್ದು ಕೇಳಿಸು ತ್ತದೆ. ದೂರದಲ್ಲಿರುವ ಎಗ್ಲಯಿಮಿನಲ್ಲೂ ಜನರು

ಅಳುತ್ತಿದ್ದಾರೆ. ಬೆಯೇರ್ ಏಲೀಮ್ ಪಟ್ಟಣ
ದಲ್ಲೂ ಜನರು ರೋಧಿಸುತ್ತಾರೆ.
9 ದೀಮೋನಿನ ನೀರು ರಕ್ತಪೂರ್ಣವಾಗಿದೆ. ಮತ್ತು
ಯೆಹೋವನಾದ ನಾನು ದೀಮೋನಿಗೆ ಇನ್ನೂ
ಕೇಡುಗಳನ್ನು ಬರಮಾಡುವೆನು. ಮೋವಾಬಿನಲ್ಲಿ
ವಾಸಿಸುವ ಕೆಲವೇ ಜನರು ಶತ್ರುಗಳಿಂದ ಪಾರಾಗಿ
ದ್ದಾರೆ. ಆದರೆ ಅವರನ್ನು ಸಾಯಿಸಲು ನಾನು ಸಿಂಹ
ಗಳನ್ನು ಕಳುಹಿಸುವೆನು.

16 ನೀವು ದೇಶದ ಅಧಿಪತಿಗೆ ಕಾಣಿಕೆಗಳನ್ನು
ಕಳುಹಿಸಬೇಕು. ನೀವು ಸೇಲದ ಕುರಿಮರಿ
ಯನ್ನು ಮರುಭೂಮಿಯ ಮೂಲಕ ಚೀಯೋನ್
ಕುಮಾರ್ತೆಯ ಪರ್ವತಕ್ಕೆ ಕಳುಹಿಸಿಕೊಡಬೇಕು.

2 ಮೋವಾಬಿನ ಸ್ತ್ರೀಯರು ಅರ್ನೋನ್ ಹೊಳೆ
ಯನ್ನು ದಾಟಲು ಪ್ರಯತ್ನಿಸುವರು. ಅವರು
ಒಂದು ಕಡೆಯಿಂದ ಇನ್ನೊಂದು ಕಡೆಗೆ ಸಹಾಯ
ಕ್ಕಾಗಿ ಓಡುವರು. ಗೂಡಿನಿಂದ ಕೆಳಗೆ ಬಿದ್ದ ಹಕ್ಕಿ
ಮರಿಗಳಂತೆ ಅವರಿರುವರು.
3 ''ನಮಗೆ ಸಹಾಯ ಮಾಡಿರಿ. ನಾವು ಮಾಡಬೇಕಾದ
ದ್ದನ್ನು ತಿಳಿಸಿರಿ. ವೈರಿಗಳಿಂದ ನಮ್ಮನ್ನು ರಕ್ಷಿಸಿರಿ.
ನೆರಳು ನಮ್ಮನ್ನು ನಡುಮಧ್ಯಾಹ್ನದ ಸೂರ್ಯನ
ಶಾಖದಿಂದ ಕಾಪಾಡುವಂತೆ ನಮ್ಮನ್ನು ಕಾಪಾಡಿರಿ.
ನಾವು ನಮ್ಮ ಶತ್ರುಗಳಿಂದ ಓಡಿ ಹೋಗುತ್ತಿದ್ದೇವೆ.
ನಮ್ಮನ್ನು ಅಡಗಿಸಿಡಿರಿ, ವೈರಿಗಳ ಕೈಗೆ ನಮ್ಮನ್ನು
ಕೊಡಬೇಡಿರಿ'' ಎಂದು ಹೇಳುವರು.
4 ತಮ್ಮ ಮನೆಯನ್ನು ಬಿಟ್ಟುಹೋಗುವಂತೆ ಮೋವಾ
ಬಿನ ಆ ಜನರನ್ನು ಬಲವಂತ ಮಾಡಲಾಯಿತು.
ಆದುದರಿಂದ ಅವರು ನಿಮ್ಮ ದೇಶದಲ್ಲಿ ವಾಸಿಸಲಿ.
ಅವರ ಶತ್ರುಗಳಿಂದ ಅವರನ್ನು ಅಡಗಿಸಿಡಿರಿ.
ದರೋಡೆಯು ನಿಂತುಹೋಗುವದು. ಶತ್ರುಗಳು
ಸೋಲಿಸಲ್ಪಡುವರು. ಇತರರಿಗೆ ಕೇಡುಮಾಡುವ
ವರು ದೇಶವನ್ನು ಬಿಟ್ಟುಹೋಗುವರು.
5 ಆಗ ಹೊಸ ಅರಸನು ಬರವನು. ಆತನು ನ್ಯಾಯ
ವಾದವುಗಳನ್ನು ಮತ್ತು ಒಳ್ಳೆಯವುಗಳನ್ನು ಮಾಡು
ವನು. ಆತನು ದಾವೀದನ ವಂಶದವನಾಗಿದ್ದಾನೆ.
ಆತನು ಪ್ರಮಾಣಿಕನೂ ಪ್ರೀತಿದಯೆಗಳಿಂದ
ತುಂಬಿದವನೂ ಆಗಿರುವನು. ಆತನ ನ್ಯಾಯ
ತೀರ್ಪು ನ್ಯಾಯಕ್ಕನುಸಾರವಾಗಿರುವದು.

6 ಮೋವಾಬಿನ ಜನರು ತುಂಬಾ ಹೆಚ್ಚಳ ಪಡುವವರೂ
ಜಂಭದವರೂ ಎಂದೂ ನಾವು ಕೇಳಿದ್ದೇವೆ. ಇವರು
ಹಿಂಸಕರಾಗಿದ್ದಾರೆ; ಬಡಾಯಿ ಕೊಚ್ಚುವವರಾಗಿದ್ದಾರೆ,
ಅವರ ಬಡಾಯಿ ಕೇವಲ ಮಾತುಗಳಷ್ಟೇ.
7 ಆ ಜಂಭದ ಪರಿಣಾಮವಾಗಿ ಇಡೀ ಮೋವಾಬ್
ಪ್ರದೇಶ ಸಂಕಟಕ್ಕೊಳಗಾಗುವದು. ಮೋವಾಬಿನ ಜನ
ರೆಲ್ಲಾ ಅಳುವರು. ಜನರು ತಮಗೆ ಹಿಂದೆ ಇದ್ದದ್ದೆಲ್ಲಾ
ಬೇಕು ಎನ್ನುತ್ತಾ ದುಃಖಿಸುವರು. ಕೀರ್ ಹರೆಷೆಥಿನಲ್ಲಿ
ತಯಾರಿಸಿದ ಅಂಜೂರದ ತಿಂಡಿ ಪದಾರ್ಥಗಳು ತಮಗೆ
ಬೇಕು ಅನ್ನುವರು. 8 ಹೆಷ್ಬೋನಿನ ತೋಟಗಳು ಮತ್ತು
ಸಿಬದ ದ್ರಾಕ್ಷಾಲತೆಗಳು ದ್ರಾಕ್ಷಿಯನ್ನು ಫಲಿಸಲಾರದ
ಕಾರಣ ಜನರು ವ್ಯಸನದಿಂದಿರುವರು. ಶತ್ರು ಸೈನ್ಯವು
ಯೆಜ್ಜೇರಿನಿಂದ ಮತ್ತು ಮರುಭೂಮಿಯವರೆಗೂ
ಸಮುದ್ರದವರೆಗೂ ಆವರಿಸಿಕೊಂಡಿರುವರು.

### ಮೋವಾಬಿನ ಕುರಿತು ಶೋಕಗೀತೆ

9 ''ದ್ರಾಕ್ಷಾಫಲವು ನಾಶವಾಗಿರುವದಕ್ಕಾಗಿ ನಾನು
ಯಜ್ಜೇರ್ ಮತ್ತು ಸಿಬ್ಮದವರೊಂದಿಗೆ ಅಳುವೆನು.
ಸುಗ್ಗಿ ಇಲ್ಲದಿರುವದಕ್ಕಾಗಿ ನಾನು ಹೆಷ್ಬೋನ್
ಮತ್ತು ಎಲೆಯಾಲೆಯ ಜನರೊಂದಿಗೆ ಅಳುವೆನು.
ಬೇಸಿಗೆ ಕಾಲದ ಹಣ್ಣುಗಳಿರದು; ಹರ್ಷಧ್ವನಿಯೂ
ಇರದು.
10 ಕರ್ಮೆಲ್ ಬೆಟ್ಟದಲ್ಲಿ ಗಾಯನವಾಗಲೀ ಹರ್ಷ
ಧ್ವನಿಯಾಗಲೀ ಇರದು. ಸುಗ್ಗಿಕಾಲದ ಎಲ್ಲಾ
ಸಂತಸಗಳನ್ನು ನಾನು ನಿಲ್ಲಿಸುವೆನು. ದ್ರಾಕ್ಷೆಯ
ಹಣ್ಣುಗಳು ರಸತೆಗೆಯಲು ಪಕ್ವವಾಗಿವೆ. ಆದರೆ
ಅವುಗಳೆಲ್ಲವೂ ವ್ಯರ್ಥವಾಗುವವು.
11 ನಾನು ಮೋವಾಬಿಗಾಗಿ ತುಂಬಾ ದುಃಖದಲ್ಲಿ
ದ್ದೇನೆ. ನಾನು ಕೀರ್ ಹೆರೆಸಿಗಾಗಿಯೂ ತುಂಬಾ
ದುಃಖದಲ್ಲಿದ್ದೇನೆ. ಈ ನಗರಗಳಿಗಾಗಿ ನಾನು
ಬಹಳವಾಗಿ ದುಃಖದಲ್ಲಿದ್ದೇನೆ.
12 ಮೋವಾಬಿನ ಜನರು ತಮ್ಮ ಪೂಜಾಸ್ಥಳಗಳಿಗೆ
ಹೋಗಿ ಆರಾಧನೆ ಮಾಡುವರು. ಸಂಭವಿಸುವ
ಸಂಗತಿಗಳನ್ನು ನೋಡಿದಾಗ ಪ್ರಾರ್ಥಿಸಲೂ
ಅವರಲ್ಲಿ ಉತ್ಸಾಹವಿರುವುದಿಲ್ಲ.''

13 ಮೋವಾಬಿನ ವಿಷಯವಾಗಿ ಯೆಹೋವನು ಅನೇಕ
ಸಾರಿ ಇವುಗಳನ್ನು ಮುಂತಿಳಿಸಿದ್ದಾನೆ. 14 ಈಗ ಯೆಹೋ
ವನು ಹೇಳುವುದೇನೆಂದರೆ: ''ಇನ್ನು ಮೂರು ವರ್ಷ
ದೊಳಗೆ (ಕೂಲಿಗಾರನು ತನ್ನ ಸಮಯವನ್ನು ಲೆಕ್ಕಿಸು
ವಂತೆ) ಎಲ್ಲಾ ಜನರು ಮತ್ತು ಅವರು ಹೆಮ್ಮೆಪಡುವ
ವಸ್ತುಗಳು ಹೋಗಿಬಿಡುತ್ತವೆ. ಕೇವಲ ಸ್ವಲ್ಪ ಮಂದಿ
ಮಾತ್ರ ಉಳಿಯುವರು. ದೇಶದಲ್ಲಿ ಹೆಚ್ಚುಮಂದಿ
ಉಳಿಯರು.''

## ಅರಾಮ್ಯರ ಕುರಿತು ದೇವರ ಸಂದೇಶ

17 ದಮಸ್ಕಕ್ಕೆ ಇದು ದುಃಖಕರವಾದ ಸಂದೇಶ. ಯೆಹೋವನು ಹೇಳುವದೇನೆಂದರೆ ಈ ಸಂಗತಿಗಳೆಲ್ಲಾ ದಮಸ್ಕದಲ್ಲಿ ನಡೆಯುತ್ತವೆ:

‘‘ದಮಸ್ಕವು ಈಗ ಒಂದು ದೊಡ್ಡ ನಗರವಾಗಿದೆ.
ಆದರೆ ಅದು ನಾಶವಾಗುವದು. ಕೆಡವಲ್ಪಟ್ಟ
ಕಟ್ಟಡಗಳು ಮಾತ್ರವೇ ದಮಸ್ಕದಲ್ಲಿರುವವು.
2 ಅರೋಯೇರ್ ಪ್ರಾಂತ್ಯದ ನಗರಗಳನ್ನು ಜನರು
ಬಿಟ್ಟು ಹೋಗುವರು. ಆ ಪಾಳುಬಿದ್ದ ನಗರಗಳಲ್ಲಿ
ಕುರಿಮಂದೆಗಳು ತಿರುಗಾಡುವವು. ಅವುಗಳಿಗೆ
ತೊಂದರೆ ಕೊಡಲು ಯಾರೂ ಇರುವುದಿಲ್ಲ.
3 ಕೋಟೆಗೋಡೆಯುಳ್ಳ ಎಫ್ರಾಯೀಮನ ಪಟ್ಟಣ
ಗಳು ನಾಶವಾಗುವವು. ದಮಸ್ಕದಲ್ಲಿರುವ ಸರ್ಕಾ
ರವು ಕೊನೆಗೊಳ್ಳುವದು. ಇಸ್ರೇಲರಿಗೆ ಆದಂ
ತೆಯೇ ಅರಾಮ್ಯರಿಗೂ ಆಗುವದು. ಪ್ರಮುಖ
ನಗರವಾಸಿಗಳು ಸೆರೆಹಿಡಿಯಲ್ಪಟ್ಟು ಒಯ್ಯಲ್ಪಡು
ವರು.’’ ಇದು ಸರ್ವಶಕ್ತನಾದ ಯೆಹೋವನ ನುಡಿ.
4 ಆ ಸಮಯದಲ್ಲಿ ಯಾಕೋಬಿನ ಸಂಪತ್ತೆಲ್ಲಾ ಕೊಳ್ಳೆ
ಹೊಡೆಯಲ್ಪಡುವದು. ಯಾಕೋಬನು ರೋಗ
ಗ್ರಸ್ಥನಾದವನಂತೆ ಬಲಹೀನನಾಗಿಯೂ ತೆಳು
ವಾಗಿಯೂ ಇರುವನು.

5 ಆ ಸಮಯದಲ್ಲಿ ರೆಫಾಯೀಮ್ ಕಣಿವೆಯಲ್ಲಿ
ಧಾನ್ಯದ ಸುಗ್ಗಿಯಂತಿರುವದು. ಕೆಲಸಗಾರರು ಹೊಲಗ
ಳಲ್ಲಿ ಬೆಳೆಯನ್ನು ಕೊಯ್ದು ಧಾನ್ಯವನ್ನು ಶೇಖರಿಸುವರು.
6 ಆ ಸಮಯವು ಆಲೀವ್ ಬೀಜಗಳನ್ನು ಜನರು
ಕೂಡಿಸಿಕೊಳ್ಳುವಂತೆ ಇರುವದು. ಆಲೀವ್ ಮರಗಳಿಂದ
ಜನರು ಕಾಯಿಗಳನ್ನು ಉದುರಿಸುವರು. ಆದರೆ ಕೆಲವು
ಕಾಯಿಗಳು ಮರಗಳ ತುದಿಯಲ್ಲಿ ಉಳಿದುಕೊಳ್ಳುವವು.
ಎತ್ತರದ ಕೊಂಬೆಗಳಲ್ಲಿ ನಾಲ್ಕೈದು ಕಾಯಿಗಳು ಉಳಿ
ಯುವವು. ಅದೇ ರೀತಿಯಲ್ಲಿ ಆ ನಗರಗಳ ಸ್ಥಿತಿಯೂ
ಇರುವದು. ಇದು ಸರ್ವಶಕ್ತನಾದ ಯೆಹೋವನ
ನುಡಿಗಳು.
7 ಆ ಸಮಯಗಳಲ್ಲಿ ಜನರು ತಮ್ಮ ನಿರ್ಮಾಣಿಕನಾದ
ದೇವರ ಕಡೆಗೆ ದೃಷ್ಟಿಸಿ ನೋಡುವರು. ಅವರ ಕಣ್ಣುಗಳು
ಇಸ್ರೇಲಿನ ಪರಿಶುದ್ಧನನ್ನು ನೋಡುತ್ತವೆ. 8 ಜನರು ತಮ್ಮ
ಮಹಾಕಾರ್ಯಗಳ ಮೇಲೆ ನಂಬಿಕೆ ಇಡುವದಿಲ್ಲ. ಸುಳ್ಳು
ದೇವರುಗಳಿಗೆ, ತಾವು ಮಾಡಿದ ವೇದಿಕೆಗಳಿಗೆ, ಪೂಜಾ
ಸ್ಥಳಗಳಿಗೆ ಅವರು ಹೋಗುವದಿಲ್ಲ.
9 ಆ ಸಮಯದಲ್ಲಿ ಕೋಟೆಗೋಡೆಗಳಿರುವ ಎಲ್ಲಾ
ಪಟ್ಟಣಗಳು ನಿರ್ಜನವಾಗುವದು. ಇಸ್ರೇಲರು ಆ ದೇಶ
ವನ್ನು ಸ್ವಾಧೀನ ಮಾಡಿಕೊಳ್ಳುವ ಕಾಲದಲ್ಲಿ ಹೇಗೆ ಅಡವಿ
ಗಳಂತೆಯೂ ಬೆಟ್ಟಗಳಂತೆಯೂ ಇದ್ದವೋ ಅದೇ ರೀತಿ
ಯಲ್ಲಿ ಇರುವವು. ಆ ಸಮಯದಲ್ಲಿ ಇಸ್ರೇಲರು ದೇಶ
ದೊಳಗೆ ಪ್ರವೇಶಿಸುವಾಗ ಅಲ್ಲಿಯ ನಿವಾಸಿಗಳೆಲ್ಲರೂ
ಓಡಿಹೋದರು. ಮುಂಬರುವ ದಿವಸಗಳಲ್ಲಿ ದೇಶವು
ಮತ್ತೆ ನಿರ್ಜನವಾಗುವದು. 10 ನೀವು ನಿಮ್ಮ ರಕ್ಷಕನಾದ
ದೇವರನ್ನು ಮರೆತು ಬಿಟ್ಟಿದ್ದರಿಂದ ನಿಮಗೆ ಹೀಗೆ ಆಗು
ವದು. ದೇವರು ನಿಮ್ಮ ಆಶ್ರಯದುರ್ಗವಾಗಿದ್ದಾ
ನೆಂಬುದನ್ನು ನೀವು ನೆನಪು ಮಾಡಿಕೊಳ್ಳಲಿಲ್ಲ.
ದೂರದ ಪ್ರಾಂತ್ಯದಿಂದ ನೀವು ಉತ್ತಮ ತಳಿಯ
ದ್ರಾಕ್ಷಿಯನ್ನು ತಂದಿರಿ. ಅದನ್ನು ನೀವು ನೆಟ್ಟರೂ ಅವು
ಚಿಗುರುವದಿಲ್ಲ. 11 ಒಂದು ದಿವಸ ಆ ಕೊಂಬೆಗಳನ್ನು
ನೆಟ್ಟು ಅದು ಚಿಗರುವಂತೆ ಮಾಡುವಿರಿ. ಮರುದಿವಸ
ಅದು ಚಿಗುರುವದು. ಸುಗ್ಗಿಯ ಕಾಲದಲ್ಲಿ ನೀವು ದ್ರಾಕ್ಷಾ
ತೋಟಕ್ಕೆ ಹೋದಾಗ ದ್ರಾಕ್ಷಿಬಳ್ಳಿಗಳೆಲ್ಲಾ ರೋಗದಿಂದ
ಸತ್ತುಹೋಗಿರುವವು.

12 ಇಗೋ! ಸಮುದ್ರವು ಭೋರ್ಗರೆಯುವ ಶಬ್ದ
ದಂತೆ ಅನೇಕ ಜನಾಂಗಗಳು ರೋಧಿಸುವ ಶಬ್ದ
ಕೇಳಿಸುತ್ತದೆ. ಆ ಶಬ್ದವು ಸಮುದ್ರದ ತೆರೆಗಳು
ದಡಕ್ಕೆ ಅಪ್ಪಳಿಸುವಂತಿದೆ.
13 ದೇವರು ಗದರಿಸಿದಾಗ ಜನರು ಓಡಿಹೋಗು
ವರು. ಆ ಜನರು ಗಾಳಿಯಲ್ಲಿ ಹಾರಿಹೋಗುವ
ಹೊಟ್ಟಿನಂತಿರುವರು; ಬಿರುಗಾಳಿಯು ಬಹು
ದೂರಕ್ಕೆ ಕೊಂಡೊಯ್ಯುವ ಬೇರಿಲ್ಲದ ಹಣಜಿ
ಗಳಂತಿರುವರು.
14 ಆ ರಾತ್ರಿ ಜನರು ಭಯಗ್ರಸ್ತರಾಗುವರು. ಬೆಳಗಾ
ಗುವದರೊಳಗೆ ಏನೂ ಉಳಿಯುವದಿಲ್ಲ.
ಹಾಗೆಯೇ ನಮ್ಮ ವೈರಿಗಳಿಗೆ ಏನೂ ದೊರಕುವ
ದಿಲ್ಲ. ಅವರು ನಮ್ಮ ದೇಶಕ್ಕೆ ನುಗ್ಗಿದರೂ ಅವರಿಗೆ
ಏನೂ ಸಿಗದು.

## ಇಥಿಯೋಪ್ಯಕ್ಕೆ ದೇವರ ಸಂದೇಶ

18 ಇಥಿಯೋಪ್ಯದ ನದಿಯ ದಡದಲ್ಲಿರುವ
ಪ್ರಾಂತ್ಯಗಳನ್ನು ಗಮನಿಸಿರಿ. ಆ ಪ್ರಾಂತ್ಯವು ಕ್ರಿಮಿ
ಕೀಟಗಳಿಂದ ತುಂಬಿದೆ. ಅವುಗಳ ರೆಕ್ಕೆಗಳ ಝೇಂಕಾರ
ವನ್ನು ನೀವು ಕೇಳಬಹುದು. 2 ಆ ದೇಶದವರು ಬೆಂಡಿನ
ದೋಣಿಗಳಲ್ಲಿ ಜನರನ್ನು ಸಮುದ್ರದಾಚೆ ಕಳುಹಿಸುವರು.
ವೇಗವುಳ್ಳದೂತರೇ, ಉನ್ನತವಾಗಿಯೂ ಬಲಶಾಲಿಗ
ಳಾಗಿಯೂ ಇರುವ ಜನರ ಬಳಿಗೆ ಹೋಗಿರಿ. ಎಲ್ಲಾ ದೇಶ
ಗಳವರು ಉನ್ನತರಾದ ಬಲಶಾಲಿಗಳಾದ ಜನರಿಗೆ ಭಯ
ಪಡುತ್ತಾರೆ. ಅವರು ಬಲಾಢ್ಯ ಜನಾಂಗ. ಅವರ

ಜನಾಂಗವು ಬೇರೆ ಜನಾಂಗಗಳನ್ನು ಸೋಲಿಸಿಬಿಡುತ್ತದೆ.
ಅವರ ದೇಶವು ನದಿಯ ಶಾಖೆಗಳಿಂದ ತುಂಬಿರುತ್ತದೆ.
3ಆ ಜನರಿಗೆ ಕೇಡು ಸಂಭವಿಸಲಿದೆ ಎಂಬ ಎಚ್ಚರಿಕೆಯನ್ನು
ಕೊಡು. ಪ್ರಪಂಚದ ಎಲ್ಲಾ ಜನರು ಆ ದೇಶಕ್ಕೆ ಸಂಭವಿ
ಸುವದನ್ನು ನೋಡುವರು. ಪರ್ವತದ ತುದಿಯಲ್ಲಿ ಧ್ವಜ
ವೇರಿಸಿದರೆ ಹೇಗೆ ಎಲ್ಲರಿಗೂ ಕಾಣಿಸುತ್ತದೋ ಹಾಗೆಯೇ
ಜನರು ಅದನ್ನು ಸ್ಪಷ್ಟವಾಗಿ ನೋಡುವರು. ಲೋಕ
ದೊಳಗೆ ವಾಸಿಸುವ ಜನರೆಲ್ಲಾ ಆ ಉನ್ನತ ಬಲಶಾಲಿಗ
ಳಾದ ಜನರಿಗೆ ಸಂಭವಿಸುವ ವಿಷಯಗಳ ವಾರ್ತೆಯನ್ನು
ಕೇಳುವರು. ರಣರಂಗದಲ್ಲಿ ಕಹಳೆಯು ಮೊಳಗುವುದು
ಹೇಗೆ ಸ್ಪಷ್ಟವಾಗಿ ಕೇಳಿಸುತ್ತದೋ ಹಾಗೇ ಕೇಳಿಸಿ
ಕೊಳ್ಳುವರು.

4ಯೆಹೋವನು ಇಂತೆನ್ನುತ್ತಾನೆ: ‘‘ನನಗಾಗಿ ಸಿದ್ಧ
ಪಡಿಸಲ್ಪಟ್ಟ ಸ್ಥಳದಲ್ಲಿ ಮೌನವಾಗಿದ್ದು ಇವುಗಳನ್ನೆಲ್ಲಾ
ವೀಕ್ಷಿಸುವೆನು. 5ಬೇಸಿಗೆಯ ಮಧ್ಯಾಹ್ನದ ಹೊತ್ತಿನಲ್ಲಿ
ಜನರು ವಿಶ್ರಮಿಸುತ್ತಿರುವರು. ಅದು ಬೇಸಿಗೆಯ ಸುಗ್ಗಿ
ಕಾಲವಾಗಿರುವದು; ಮಳೆ ಇರುವದಿಲ್ಲ, ಕೇವಲ
ಮುಂಜಾನೆಯ ಇಬ್ಬನಿ ಇರುವದು. ಆಗ ಭಯಂಕರ
ವಾದ ಒಂದು ಘಟನೆಯು ನಡೆಯುವದು. ಅದು ಪುಷ್ಪ
ಗಳು ಅರಳುವ ಕಾಲದ ನಂತರ ನಡೆಯುವದು. ಹೊಸ
ದ್ರಾಕ್ಷಾಲತೆಗಳು ಚಿಗುರುತ್ತಾ ಬೆಳೆಯವವು. ಆದರೆ ಅವು
ಫಲಕೊಡುವದಕ್ಕಿಂತ ಮೊದಲೇ ಶತ್ರುಗಳು ಬಂದು ಬಳ್ಳಿ
ಗಳನ್ನು ಕೊಯ್ದುಹಾಕುವರು. ಬಳ್ಳಿಗಳನ್ನು ನಾಶಮಾಡಿ
ವೈರಿಗಳು ಅವುಗಳನ್ನು ದೂರ ಬಿಸಾಡಿಬಿಡುವರು.
6ಅವುಗಳನ್ನು ಅಡವಿಯ ಪ್ರಾಣಿಗಳಿಗೂ ಬೆಟ್ಟದ ಹಕ್ಕಿ
ಗಳಿಗೂ ತಿನ್ನಲು ಬಿಡುವರು. ಪಕ್ಷಿಗಳು ಬೇಸಿಗೆಕಾಲದಲ್ಲಿ
ದ್ರಾಕ್ಷಾಲತೆಗಳ ಮೇಲೆ ವಾಸಿಸುತ್ತವೆ; ಚಳಿಗಾಲದಲ್ಲಿ
ಕಾಡುಪ್ರಾಣಿಗಳು ದ್ರಾಕ್ಷಾಲತೆಗಳನ್ನು ತಿನ್ನುತ್ತವೆ.’’

7ಆ ಸಮಯದಲ್ಲಿ ಸರ್ವಶಕ್ತನಾದ ದೇವರಿಗೆ ವಿಶೇಷ
ವಾದ ಕಾಣಿಕೆಯು ಸಮರ್ಪಿಸಲ್ಪಡುವದು. ಆ ಕಾಣಿ
ಕೆಯು ಉನ್ನತವಾಗಿರುವ ಬಲಶಾಲಿಗಳಾದ ಜನರಿಂದ
ಬರುವದು. ಎಲ್ಲಾ ದೇಶಗಳ ಜನರು ಈ ಉನ್ನತವಾದ
ಈ ಬಲಿಷ್ಠರಿಗೆ ಹೆದರುವರು. ಅವರು ಬಲಾಢ್ಯ ಜನಾಂಗ
ವಾಗಿದ್ದಾರೆ. ಅವರ ಜನಾಂಗವು ಇತರ ಜನಾಂಗಗಳನ್ನು
ಸೋಲಿಸುತ್ತದೆ. ಅವರ ದೇಶವು ನದಿಯ ಶಾಖೆಗಳಿಂದ
ತುಂಬಿಯದೆ ಈ ಕಾಣಿಕೆಯನ್ನು ಚೀಯೋನ್ ಪರ್ವತ
ದಲ್ಲಿರುವ ಯೆಹೋವನ ಸ್ಥಳಕ್ಕೆ ತರುವರು.

### ಈಜಿಪ್ಟಿಗೆ ದೇವರ ಸಂದೇಶ

19 ಈಜಿಪ್ಟಿನ ವಿಷಯವಾಗಿ ದುಃಖಕರವಾದ
ಸಂದೇಶ: ಯೆಹೋವನು ವೇಗವಾಗಿ ಬರುವ
ಮೋಡದೊಂದಿಗೆ ಬರುತ್ತಿದ್ದಾನೆ. ಆತನು ಈಜಿಪ್ಟನ್ನು
ಪ್ರವೇಶಿಸುವಾಗ ಈಜಿಪ್ಟಿನ ಸುಳ್ಳುದೇವರುಗಳೆಲ್ಲಾ ಹೆದರಿ
ನಡುಗುವವು. ಈಜಿಪ್ಟು ಧೈರ್ಯಶಾಲಿ ದೇಶವಾಗಿದ್ದರೂ,
ಅದರ ಧೈರ್ಯ ಮೇಣದಂತೆ ಕರಗಿ ಹೋಗುವದು.

2ದೇವರು ಹೇಳುವದೇನೆಂದರೆ: ‘‘ನಾನು ಈಜಿಪ್ಟಿನ
ಜನರಲ್ಲಿ ಒಳಜಗಳವನ್ನು ಹುಟ್ಟಿಸುವೆನು. ಜನರು ತಮ್ಮ
ಸಹೋದರರೊಂದಿಗೆ ಜಗಳವಾಡುವರು. ನೆರೆಹೊರೆ
ಯವರು ಪರಸ್ಪರ ಜಗಳವಾಡುವರು. ನಗರವು ನಗರ
ದೊಂದಿಗೆ ಯುದ್ಧ ಮಾಡುವದು. ಒಂದು ಪ್ರಾಂತ್ಯವು
ಇನ್ನೊಂದು ಪ್ರಾಂತ್ಯದೊಂದಿಗೆ ಯುದ್ಧಮಾಡುವದು.
3ಈಜಿಪ್ಟಿನ ಜನರಲ್ಲಿ ಗಲಿಬಿಲಿ ಉಂಟಾಗುವದು. ಆ
ಜನರು ತಮ್ಮ ಸುಳ್ಳುದೇವರುಗಳ ಬಳಿಗೂ ಪಂಡಿತರ
ಬಳಿಗೂ ಓಡಿ ತಾವು ಏನು ಮಾಡಬೇಕೆಂದು ವಿಚಾರಿಸು
ವರು, ಮಂತ್ರವಾದಿಗಳನ್ನೂ ಬೇತಾಳಿಕರನ್ನೂ ಕೇಳು
ವರು. ಆದರೆ ಅವರ ಯಾವ ಸಲಹೆಗಳೂ ಪ್ರಯೋಜನಕ್ಕೆ
ಬರುವದಿಲ್ಲ.’’

4ಸರ್ವಶಕ್ತನೂ ಒಡೆಯನೂ ಆಗಿರುವ ಯೆಹೋವನು
ಹೇಳುವದೇನೆಂದರೆ: ‘‘ನಾನು ಈಜಿಪ್ಟನ್ನು ಕಠಿಣನಾದ
ಒಡೆಯನಿಗೆ ಒಪ್ಪಿಸುವೆನು. ಬಲಿಷ್ಠ ಒಡೆಯನು ಅವರನ್ನು
ಆಳುವನು. 5ನೈಲ್ ನದಿಯು ಬತ್ತಿ ಹೋಗುವದು.
ಸಮುದ್ರದಿಂದ ನೀರು ಇಲ್ಲವಾಗುವದು. 6ಎಲ್ಲಾ ನದಿಗ
ಳಿಂದ ದುರ್ವಾಸನೆ ಹೊರಡುವದು. ಈಜಿಪ್ಟಿನ ಕಾಲಿವೆ
ಗಳು ಬತ್ತಿಹೋಗುತ್ತವೆ; ಜಲಸಸ್ಯಗಳೆಲ್ಲ ಒಣಗಿ ಹೋಗು
ತ್ತವೆ. 7ನದಿಯ ದಡದಲ್ಲಿರುವ ಮರಗಳೆಲ್ಲಾ ಒಣಗಿ
ಹೋಗಿ ಗಾಳಿಯಲ್ಲಿ ಹಾರಿಹೋಗುವವು. ನದಿಯ ತೀರ
ದಲ್ಲಿರುವ ಮರಗಳೂ ಒಣಗಿ ಹೋಗುವವು.

8‘‘ಬೆಸ್ತರೂ ಮೀನು ಹಿಡಿಯುವವರೂ ನೈಲ್ ನದಿಯ
ನೀರು ಬತ್ತಿಹೋದುದಕ್ಕಾಗಿ ದುಃಖಿಸುತ್ತಾ ಅಳುವರು.
ಅವರು ಜೀವನೋಪಾಯಕ್ಕಾಗಿ ನೈಲ್ ನದಿಯನ್ನು
ಆಧಾರ ಮಾಡಿಕೊಂಡಿದ್ದರು. ಆದರೆ ಅದು ಬತ್ತಿ ಹೋಗು
ವದು. 9ಬಟ್ಟೆಗಳನ್ನು ನೇಯುವವರೂ ದುಃಖಿಸುವರು.
ನದಿ ಒಣಗಿಹೋದದ್ದರಿಂದ ನದಿಯ ತೀರದಲ್ಲಿ ನಾರಿನ
ಗಿಡಗಳು ಬೆಳೆಯದೆ ಇರುವದರಿಂದ ಅವರಿಗೆ ಬಟ್ಟೆ
ನೇಯಲು ನಾರು ಸಿಗುವುದಿಲ್ಲ. 10ನೀರನ್ನು ಉಳಿಸುವದ
ಕ್ಕಾಗಿ ನದಿಗೆ ಅಣೆಕಟ್ಟನ್ನು ಕಟ್ಟುವ ಜನರೂ ದುಃಖಿಸು
ವರು. ಯಾಕೆಂದರೆ ನದಿಯಲ್ಲಿ ನೀರಿಲ್ಲದ ನಿಮಿತ್ತ
ಅವರಿಗೆ ಕೆಲಸವಿರುವುದಿಲ್ಲ.

11‘‘ಚೋಯನಿನ ನಗರದ ಪ್ರಮುಖರು ಮೂರ್ಖ
ರಾಗಿದ್ದಾರೆ. ಫರೋಹನ ಜ್ಞಾನಿಗಳಾದ ಸಲಹೆಗಾರರು
ತಪ್ಪು ಸಲಹೆ ಕೊಡುತ್ತಾರೆ. ಅವರು ತಾವೇ ಬುದ್ಧಿವಂತ
ರೆಂದೂ ರಾಜವಂಶದವರೆಂದೂ ಹೇಳಿಕೊಳ್ಳುವರು.
ಆದರೆ ತಾವು ನೆನಸುವಷ್ಟರಮಟ್ಟಿಗೆ ಅವರು ಬುದ್ಧಿ
ವಂತರಲ್ಲ.’’

12ಈಜಿಪ್ಟೇ, ನಿನ್ನ ಜ್ಞಾನಿಗಳು ಎಲ್ಲಿ? ಸರ್ವಶಕ್ತನಾದ
ಯೆಹೋವನು ಈಜಿಪ್ಟ್‌ದೇಶಕ್ಕೆ ಮಾಡಿರುವ ಯೋಜನೆ
ಯನ್ನು ನಿನ್ನ ಜ್ಞಾನಿಗಳು ಮೊದಲು ತಿಳಿದುಕೊಳ್ಳಬೇಕು.
ನಿಮಗೆ ಸಂಭವಿಸಲಿರುವುದನ್ನು ಅವರು ನಿಮಗೆ ತಿಳಿಸ
ಬೇಕು.
13ಚೋಯನಿನ ಪ್ರಮುಖರು ಮೋಸಹೋದರು.
ನೋಫಿನ ಪ್ರಮುಖರು ಸುಳ್ಳನ್ನು ನಂಬಿದರು. ಆದುದ
ರಿಂದ ನಾಯಕರು ಈಜಿಪ್ಟನ್ನು ತಪ್ಪುದಾರಿಗೆ ನಡೆಸಿದರು.
14ಯೆಹೋವನು ಆ ನಾಯಕರನ್ನು ಗಲಿಬಿಲಿಪಡಿಸಿದನು.
ಅವರು ಈಜಿಪ್ಟನ್ನು ತಪ್ಪಾದ ದಾರಿಯಲ್ಲಿ ನಡೆಸಿದರು.
ಅವರು ಮಾಡುವ ಪ್ರತಿಯೊಂದು ಕಾರ್ಯವೂ ತಪ್ಪಾ
ದದ್ದೇ. ಅವರು ಕುಡಿದು ಮತ್ತರಾದವರಂತೆ ನೆಲದ ಮೇಲೆ
ಬಿದ್ದು ಹೊರಳಾಡುತ್ತಾರೆ. 15ಆ ನಾಯಕರುಗಳಿಗೆ ಏನೂ
ಮಾಡಲಾಗದು. (ಈ ನಾಯಕರುಗಳು ತಲೆಯೂ
ಬಾಲವೂ ಆಗಿದ್ದಾರೆ; ಮರದ ಕೊಂಬೆಯೂ ಕಾಂಡವೂ
ಆಗಿದ್ದಾರೆ.)
16ಆ ಸಮಯದಲ್ಲಿ ಈಜಿಪ್ಟಿನವರು ಭಯದಿಂದ
ಕಂಗೆಟ್ಟ ಹೆಂಗಸರಂತಿರುವರು. ಅವರು ಸರ್ವಶಕ್ತನಾದವ
ನಿಗೆ ಭಯಪಡುವರು. ಯೆಹೋವನು ಜನರನ್ನು ಶಿಕ್ಷಿ
ಸಲು ತನ್ನ ಕೈಯನ್ನೆತ್ತುವನು. ಆಗ ಅವರೆಲ್ಲರೂ ಹೆದರಿ
ಹೋಗುವರು. 17ಯೆಹೂದ ಪ್ರಾಂತ್ಯದವರೂ ಈಜಿಪ್ಟಿ
ನಲ್ಲಿರುವವರೂ ಭಯಪಡಬೇಕಾಗಿದೆ. ಈಜಿಪ್ಟಿನಲ್ಲಿ
ಯಾರೇ ಆಗಲಿ ಯೆಹೂದದ ಹೆಸರು ಕೇಳಿದಾಗ ಭಯ
ಪಡುವರು. ಯಾಕೆಂದರೆ ಭಯಂಕರ ಘಟನೆಗಳು
ಈಜಿಪ್ಟಿನಲ್ಲಿ ಸಂಭವಿಸುವಂತೆ ಸರ್ವಶಕ್ತನಾದ ಯೆಹೋ
ವನು ಮಾಡುತ್ತಾನೆ. 18ಆ ಸಮಯದಲ್ಲಿ ಈಜಿಪ್ಟಿನಲ್ಲಿ
ಕಾನಾನ್ ದೇಶದ (ಯೆಹೂದ್ಯರ) ಭಾಷೆಯನ್ನಾಡುವ
ಐದು ಪಟ್ಟಣಗಳಿರುವವು. ಅದರಲ್ಲಿ ಒಂದರ ಹೆಸರು
ನಾಶನದ ನಗರ.

ಆ ಜನರು ಸರ್ವಶಕ್ತನಾದ ಯೆಹೋವನನ್ನು ಹಿಂಬಾಲಿ
ಸಲು ತೀರ್ಮಾನಿಸುವರು. 19ಆ ಸಮಯದಲ್ಲಿ ಈಜಿಪ್ಟಿನ
ಮಧ್ಯದಲ್ಲಿ ಯೆಹೋವನಿಗಾಗಿ ಒಂದು ವೇದಿಕೆ ಇರು
ವದು. ಈಜಿಪ್ಟಿನ ಗಡಿಯಲ್ಲಿ ಯೆಹೋವನ ಗೌರವಾರ್ಥ
ವಾಗಿ ಸ್ಮಾರಕಸ್ತಂಭ ಇರುವದು. 20ಇದು ಸರ್ವಶಕ್ತನಾದ
ಯೆಹೋವನು ಅದ್ಭುತವನ್ನು ನಡಿಸುತ್ತಾನೆಂಬುದಕ್ಕೆ
ಗುರುತಾಗಿದೆ. ಜನರು ಯಾವಾಗಲಾದರೂ ಸರಿಯೇ
ಸಹಾಯಕ್ಕಾಗಿ ಮೊರೆಯಿಟ್ಟರೆ ಆತನು ಸಹಾಯವನ್ನು
ಕಳುಹಿಸುವನು. ಯೆಹೋವನು ಅವರನ್ನು ರಕ್ಷಿಸಲೂ
ಕಾಪಾಡಲೂ ಒಬ್ಬನನ್ನು ಕಳುಹಿಸುವನು. ಆ ಮನುಷ್ಯನು
ಬೇರೆಯವರಿಂದ ಶೋಷಿತರಾದವರನ್ನು ಸಂರಕ್ಷಿಸು
ವನು. 21ಆ ಸಮಯದಲ್ಲಿ ಈಜಿಪ್ಟಿನ ಜನರು ಯೆಹೋವ
ನನ್ನು ನಿಜವಾಗಿಯೂ ಅರಿತುಕೊಳ್ಳುವರು. ಅವರು ದೇವ
ರನ್ನು ಪ್ರೀತಿಸುವರು. ಅವರು ಯೆಹೋವನನ್ನು ಸೇವಿಸಿ
ಅನೇಕ ಯಜ್ಞಗಳನ್ನು ಸಮರ್ಪಿಸುವರು. ಯೆಹೋವನಿಗೆ
ಹರಕೆ ಹೊತ್ತು ಸಲ್ಲಿಸುವರು.
22ಯೆಹೋವನು ಈಜಿಪ್ಟಿನ ಜನರನ್ನು ಶಿಕ್ಷಿಸುವನು.
ಆಮೇಲೆ ಆತನು ಅವರನ್ನು ಕ್ಷಮಿಸುವನು. ಆಗ ಅವರು
ಆತನ ಬಳಿಗೆ ಹಿಂದಿರುಗಿ ಬರುವರು. ಯೆಹೋವನು
ಅವರ ಪ್ರಾರ್ಥನೆಯನ್ನು ಕೇಳಿ ಅವರನ್ನು ಕ್ಷಮಿಸುವನು.
23ಆ ಸಮಯದಲ್ಲಿ ಈಜಿಪ್ಟಿನಿಂದ ಅಶ್ಶೂರದವರೆಗೆ
ಹೆದ್ದಾರಿ ಇರುವುದು. ಆಗ ಅಶ್ಶೂರದವರು ಈಜಿಪ್ಟಿಗೂ,
ಈಜಿಪ್ಟಿನವರು ಅಶ್ಶೂರಕ್ಕೂ ಪ್ರಯಾಣ ಮಾಡುವರು.
ಈಜಿಪ್ಟಿನವರು ಅಶ್ಶೂರದವರೊಟ್ಟಿಗೆ ಕೆಲಸ
ಮಾಡುವರು.
24ಆ ಸಮಯದಲ್ಲಿ ಇಸ್ರೇಲ್, ಅಶ್ಶೂರ ಮತ್ತು ಈಜಿಪ್ಟು
ಒಟ್ಟಾಗಿ ಸೇರಿ ದೇಶವನ್ನು ನಿಯಂತ್ರಿಸುವರು. ಇದು
ದೇಶಕ್ಕೆ ಆಶೀರ್ವಾದದಾಯಕವಾಗಿರುವದು. 25ಸರ್ವ
ಶಕ್ತನಾದ ಯೆಹೋವನು ಈ ದೇಶಗಳನ್ನು ಆಶೀರ್ವದಿ
ಸುವನು. ಆತನು ''ಈಜಿಪ್ಟೇ, ನೀನು ನನ್ನವನು; ಅಶ್ಶೂ
ರವೇ, ನಾನು ನಿನ್ನನ್ನೂ ನಿರ್ಮಿಸಿದೆನು. ಇಸ್ರೇಲೇ, ನೀನು
ನನ್ನ ಸ್ವಾಸ್ತ್ಯ. ನೀವೆಲ್ಲರೂ ಆಶೀರ್ವದಿಸಲ್ಪಟ್ಟವರು ''
ಎನ್ನುವನು.

### ಅಶ್ಶೂರವು ಈಜಿಪ್ಟ್ ಮತ್ತು ಇಥಿಯೋಪ್ಯವನ್ನು ಸೋಲಿಸುವದು

20 ಸರ್ಗೋನ್ ಅಶ್ಶೂರದ ರಾಜನಾಗಿದ್ದನು.
ಇವನು ತರ್ತಾನನ್ನು ಅಷ್ಡೋದಿಗೆ ವಿರುದ್ಧವಾಗಿ
ಯುದ್ಧಮಾಡಲು ಕಳುಹಿಸಿದನು. ತರ್ತಾನ್ ಎಂಬವನು
ಅಷ್ಡೋದ್ ನಗರಕ್ಕೆ ಹೋಗಿ ಅದನ್ನು ವಶಪಡಿಸಿ
ಕೊಂಡನು. 2ಆ ಸಮಯದಲ್ಲಿ ಆಮೋಚನ ಮಗನಾದ
ಯೆಶಾಯನೊಂದಿಗೆ ಯೆಹೋವನು ಮಾತನಾಡಿದನು.
''ನಿನ್ನ ಶೋಕವಸ್ತ್ರಗಳನ್ನು ತೆಗೆದುಹಾಕು. ನಿನ್ನ ಕಾಲುಗ
ಳಿಂದ ಪಾದರಕ್ಷೆಗಳನ್ನು ತೆಗೆದುಬಿಡು'' ಎಂದು
ಯೆಹೋವನು ಹೇಳಿದಾಗ ಯೆಶಾಯನು ಆತನಿಗೆ
ವಿಧೇಯನಾದನು. ಯೆಶಾಯನು ಪಾದರಕ್ಷೆಗಳಿಲ್ಲದೆ,
ಬಟ್ಟೆಗಳಿಲ್ಲದೆ ಅಡ್ಡಾಡಿದನು.
3ಆಗ ಯೆಹೋವನು, ''ಮೂರು ವರ್ಷಗಳ ತನಕ ನನ್ನ
ಸೇವಕನಾದ ಯೆಶಾಯನು ಬಟ್ಟೆ ಇಲ್ಲದೆ, ಪಾದರಕ್ಷೆ
ಇಲ್ಲದೆ ನಡೆದಾಡಿದ್ದಾನೆ. ಇದು ಈಜಿಪ್ಟಿಗೂ ಇಥಿಯೋ
ಪ್ಯಕ್ಕೂ ಗುರುತಾಗಿದೆ. 4ಅಶ್ಶೂರದ ಅರಸನು ಈಜಿಪ್ಟನ್ನೂ
ಇಥಿಯೋಪ್ಯವನ್ನೂ ಸೋಲಿಸುವನು. ಅಶ್ಶೂರವು ಜನ
ರನ್ನು ಸೆರೆಹಿಡಿದು ಅವರ ರಾಜ್ಯಗಳಿಂದ ಹೊರಗೆ
ಕೊಂಡುಹೋಗುವದು. ವೃದ್ಧರೂ ಬಾಲಕರೂ ಬಟ್ಟೆಯಿ
ಲ್ಲದೆಯೂ ಪಾದರಕ್ಷೆಗಳಿಲ್ಲದೆಯೂ ಇರುವರು. ಅವರು

ಪೂರ್ಣ ಬೆತ್ತಲೆಯಾಗಿರುವರು. ಈಜಿಪ್ಟಿನ ಜನರು ನಾಚಿ
ಕೆಗೆ ತುತ್ತಾಗುವರು. [5]ಜನರು ಇಥಿಯೋಪ್ಯದ ಕಡೆಗೆ
ಸಹಾಯಕ್ಕಾಗಿ ನೋಡುವರು. ಅವರು ಕಂಗೆಟ್ಟು
ಹೋಗುವರು. ಈಜಿಪ್ಟಿನ ಮಹಿಮೆಯನ್ನು ಗಮನಿಸಿದ
ವರು ಈಗ ನಾಚಿಕೆಯಲ್ಲಿ ಬೀಳುವರು'' ಎನ್ನುವನು.
[6]ಸಮುದ್ರ ತೀರದಲ್ಲಿ ವಾಸಿಸುವವರು ಹೀಗೆ ಹೇಳು
ವರು: ''ಆ ದೇಶದವರು ನಮಗೆ ಸಹಾಯ ಮಾಡುವ
ರೆಂದು ಅವರನ್ನು ನಂಬಿದೆವು. ಅಶ್ಶೂರದ ಅರಸನಿಂದ
ನಮ್ಮನ್ನು ಕಾಪಾಡುವಂತೆ ನಾವು ಅವರ ಬಳಿಗೆ ಓಡಿ
ಹೋದೆವು. ಆದರೆ ಈಗ ನೋಡಿ, ಆ ದೇಶದವರು
ಸೋತು ಹೋಗಿ ವೈರಿವಶವಾಗಿದ್ದಾರೆ. ಈಗ ನಾವು
ಪಾರಾಗಲು ಹೇಗೆ ಸಾಧ್ಯ?''

### ಬಾಬಿಲೋನಿಗೆ ದೇವರ ಸಂದೇಶ

21 ಸಮುದ್ರದ ಮರುಭೂಮಿಗೆ ದುಃಖದ ಸಂದೇಶ:

ಮರುಭೂಮಿಯ ಕಡೆಯಿಂದ ಏನೋ ಬರುತ್ತಿದೆ.
ಅದು ನೆಗೆವಿನ ಕಡೆಯಿಂದ ಬೀಸುತ್ತಿರುವ ಗಾಳಿ
ಯಂತೆ ಬರುತ್ತಿದೆ. ಅದು ಭಯಂಕರವಾದ ದೇಶ
ದಿಂದ ಬರುತ್ತಿದೆ.
2 ನಡೆಯಲಿರುವ ಒಂದು ಭಯಂಕರ ಘಟನೆ ಯನ್ನು
ನಾನು ನೋಡಿದ್ದೇನೆ. ನಿನಗೆ ವಿರುದ್ಧವಾಗಿ
ದ್ರೋಹಿಗಳು ಏಳುತ್ತಿದ್ದಾರೆ. ನಿನ್ನ ಧನೈಶ್ವರ್ಯ
ಗಳನ್ನು ಜನರು ಕಿತ್ತುಕೊಳ್ಳುತ್ತಿದ್ದಾರೆ. ಏಲಾಮೇ,
ಹೋಗಿ ಆ ಜನರೊಂದಿಗೆ ಹೋರಾಡು,
ಮೇದ್ಯವೇ, ಆ ಪಟ್ಟಣವನ್ನು ನಿನ್ನ ಸೈನ್ಯದಿಂದ
ಸೋಲಿಸು. ಆ ನಗರದ ಎಲ್ಲಾ ದುಷ್ಟತನವನ್ನು
ನಾನು ಕೊನೆಗಾಣಿಸುವೆನು.

[3]ನಾನು ಆ ಭಯಂಕರ ಸಂಗತಿಗಳನ್ನು ನೋಡಿದ್ದರಿಂದ
ಈಗ ಭಯಪೀಡಿತನಾಗಿದ್ದೇನೆ. ಭಯದಿಂದ ನನ್ನ
ಹೊಟ್ಟೆಯು ನೋಯುತ್ತಿದೆ. ಆ ನೋವು ಪ್ರಸವವೇದನೆ
ಯಂತಿದೆ. ನಾನು ಕೇಳುವ ವಿಷಯಗಳು ನನ್ನನ್ನು ಭಯ
ಪಡಿಸಿವೆ; ನಾನು ನೋಡುವ ವಿಷಯಗಳು ನನ್ನನ್ನು
ನಡುಗಿಸುತ್ತಿವೆ. [4]ನಾನು ಚಿಂತೆಯಿಂದಲೂ ಭಯ
ದಿಂದಲೂ ನಡುಗುತ್ತಿದ್ದೇನೆ. ನನ್ನ ಆನಂದದ ರಾತ್ರಿಯು
ಭಯಂಕರವಾಗಿದೆ.

5 ಜನರಾದರೊ ''ಊಟ ಬಡಿಸಿರಿ! ತಿನ್ನೋಣ,
ಕುಡಿಯೋಣ'' ಎಂದು ಹೇಳುತ್ತಿದ್ದಾರೆ; ಅದೇ
ಸಮಯದಲ್ಲಿ ಸೈನಿಕರು, ''ಕಾವಲುಗಾರರನ್ನು
ಇರಿಸಿರಿ, ಸೇನಾಪತಿಗಳೇ ಎದ್ದೇಳಿರಿ, ನಿಮ್ಮ
ಗುರಾಣಿಗಳನ್ನು ಉಜ್ಜಿ ನಯಗೊಳಿಸಿರಿ'' ಎಂದು
ಹೇಳುತ್ತಿದ್ದಾರೆ.

[6]ನನ್ನ ಒಡೆಯನು ನನಗೆ , ''ಹೋಗಿ ಈ ನಗರವನ್ನು
ಕಾಯಲು ಒಬ್ಬ ಮನುಷ್ಯನನ್ನು ಕಂಡುಹಿಡಿ. ಅವನು
ಏನು ನೋಡಿದರೂ ನಮಗೆ ತಿಳಿಸಬೇಕು. [7]ಅವನು
ಸಾಲಾಗಿ ಬರುತ್ತಿರುವ ಸೈನಿಕರನ್ನೋ, ಕತ್ತೆಗಳನ್ನೋ,
ಒಂಟೆಗಳನ್ನೋ ನೋಡಿದರೆ ಬಹಳ ಸೂಕ್ಷ್ಮವಾಗಿ
ಆಲಿಸಬೇಕು.''
[8]ಒಂದು ದಿವಸ ಆ ಕಾವಲುಗಾರನು, ''ಸಿಂಹ ಸಿಂಹ''
ಎಂದು ಅರಚಿದನು. ಆ ಕಾವಲುಗಾರನು, ''ನನ್ನ ಒಡೆ
ಯನೇ, ಪ್ರತಿದಿನವೂ ನಾನು ಹಗಲಿರುಳು ಕಾವಲಿನ
ಬುರುಜಿನಲ್ಲಿ ನಿಂತುಕೊಂಡು ಕಾವಲು ಕಾಯುತ್ತಿದ್ದೇನೆ;
[9]ನೋಡು, ಅವರು ಬರುತ್ತಿದ್ದಾರೆ. ಅಶ್ವದಳಗಳು ಸಾಲು
ಸಾಲಾಗಿಯೂ ಬರುತ್ತಿವೆ '' ಎಂದನು.

ಆಗ ಒಬ್ಬ ದೂತನು, ''ಬಾಬಿಲೋನಿಗೆ ಸೋಲಾ
ಯಿತು. ಬಾಬಿಲೋನು ನೆಲಕ್ಕೆ ಅಪ್ಪಳಿಸಲ್ಪಟ್ಟಿತು.
ಅದರ ದೇವದೇವತೆಯರ ವಿಗ್ರಹಗಳೆಲ್ಲಾ ನೆಲದ
ಮೇಲೆ ಚೂರುಚೂರಾಗಿ ಬಿದ್ದಿವೆ'' ಎಂದು
ಹೇಳಿದನು.

[10]ನನ್ನ ಜನರೇ ಸರ್ವಶಕ್ತನೂ ದೇವರೂ ಆಗಿರುವ
ಯೆಹೋವನು ಹೇಳಿದ್ದನ್ನೆಲ್ಲಾ ಇಸ್ರೇಲರಾದ ನಿಮಗೆ
ತಿಳಿಸಿದ್ದೇನೆ. ಕಣದಲ್ಲಿ ಧಾನ್ಯವು ನುಚ್ಚುನೂರಾಗುವಂತೆ
ನೀವು ನಜ್ಜುಗುಜ್ಜಾಗುವಿರಿ.

### ಎದೋಮಿಗೆ ದೇವರ ಸಂದೇಶ

[11]ದೂಮದ ಕುರಿತು ದುಃಖದ ದೈವೋಕ್ತಿ:

ಸೇಯಿರ್‌ನಿಂದ ಎದೋಮನ್ನು ಯಾರೋ ಕರೆ
ದರು: ''ಕಾವಲುಗಾರನೇ, ರಾತ್ರಿ ಮುಗಿಯಲು
ಎಷ್ಟು ಸಮಯ ಉಂಟು? ರಾತ್ರಿಗೆ ಇನ್ನು ಎಷ್ಟು
ಕಾಲ ಉಂಟು?'' ಎಂದು ಕೇಳಿದರು.
12 ಅದಕ್ಕೆ ''ಮುಂಜಾನೆ ಬರುತ್ತಿದೆ. ಆದರೆ ರಾತ್ರಿ
ತಿರುಗಿ ಬರುತ್ತಿದೆ. ನೀನೇನಾದರೂ ಕೇಳಬೇಕಿದ್ದರೆ
ಮತ್ತೆ ಬಂದು ವಿಚಾರಿಸು''ಎಂದು ಉತ್ತರಿಸಿದನು.

### ಅರೇಬಿಯಕ್ಕೆ ದೇವರ ಸಂದೇಶ

[13]ಅರೇಬಿಯದ ಬಗ್ಗೆ ದುಃಖಕರವಾದ ಸಂದೇಶ.

ದೇದಾನಿನಿಂದ ಬಂದ ಪ್ರಯಾಣಿಕರು ಅರೇಬಿಯ
ಮರುಭೂಮಿಯಲ್ಲಿನ ಪೊದೆಗಳಲ್ಲಿ ರಾತ್ರಿ
ತಂಗಿದರು.
14 ಬಾಯಾರಿದ ಪ್ರಯಾಣಿಕರಿಗೆ ಅವರು ಕುಡಿಯಲು
ನೀರುಕೊಟ್ಟರು. ತೇಮದ ಕೆಲವರು ಹಸಿದ
ಪ್ರವಾಸಿಗಳಿಗೆ ಊಟಕೊಟ್ಟರು.
15 ಅವರು ತಮ್ಮನ್ನು ಸಾಯಿಸಲಿಕ್ಕಿದ್ದ ಕತ್ತಿಯಿಂದ
ತಪ್ಪಿಸಿಕೊಂಡು ಬಂದವರು. ಅವರು ತಮ್ಮನ್ನು
ಹೊಡೆಯಲು ಸಿದ್ಧವಾಗಿದ್ದ ಬಾಣಗಳಿಂದ ಪಾರಾಗಿ
ಬಂದವರು. ಅವರು ಘೋರ ರಣರಂಗ ದಿಂದ
ಓಡಿಬಂದವರು.

16ನನ್ನ ಒಡೆಯನಾದ ಯೆಹೋವನು ಈ ವಿಷಯಗಳು
ಸಂಭವಿಸುವವೆಂದು ಹೇಳಿದನು. ಆತನು ಹೇಳಿದ್ದೇ
ನೆಂದರೆ: ‘‘ಇನ್ನೊಂದು ವರ್ಷದಲ್ಲಿ (ಕೂಲಿಗಾರನು ತನ್ನ
ಸಮಯವನ್ನು ಲೆಕ್ಕಿಸುವಂತೆ) ಕೇದಾರಿನ ಘನತೆಯೆ
ಲ್ಲವೂ ಹೋಗಿಬಿಡುವದು. 17ಆ ಸಮಯದಲ್ಲಿ ಕೆಲವೇ
ಮಂದಿ ಬಿಲ್ಲುಗಾರರು ಕೇದಾರಿನ ವೀರರೊಳಗಿಂದ
ಉಳಿಯುವರು.’’ ಇಸ್ರೇಲರ ದೇವರಾದ ಯೆಹೋವನು
ಇದನ್ನು ನುಡಿದನು.

### ಜೆರುಸಲೇಮಿಗೆ ದೇವರ ಸಂದೇಶ

22 ದಿವ್ಯದರ್ಶನದ ಕಣಿವೆಯ ವಿಷಯವಾಗಿ
ದುಃಖದ ಸಂದೇಶ:

ಜನಗಳೇ, ನಿಮಗೆ ಏನಾಯಿತು? ನಿಮ್ಮ ಮನೆ
ಮಾಳಿಗೆಯ ಮೇಲೆ ಯಾಕೆ ಅಡಗಿರುತ್ತೀರಿ?
2 ಹಿಂದಿನ ಕಾಲದಲ್ಲಿ ಈ ನಗರವು ಅತ್ಯಂತ ಜನ
ಸಂದಣಿಯವಾಗಿತ್ತು. ಈ ನಗರದಲ್ಲಿ ಗದ್ದಲವೂ
ಜನರ ಸಂತಸದ ಧ್ವನಿಯೂ ತುಂಬಿತ್ತು. ಆದರೆ ಈಗ
ಎಲ್ಲವೂ ಬದಲಾಯಿತು. ನಿಮ್ಮ ಜನರು ಸತ್ತದ್ದು
ಖಡ್ಗದಿಂದಲ್ಲ. ಯುದ್ಧದಲ್ಲಿ ಸಾಯದೆ ಬೇರೆ ರೀತಿ
ಯಲ್ಲಿ ಸತ್ತರು.
3 ಅಧಿಪತಿಗಳೆಲ್ಲಾ ಒಟ್ಟಾಗಿ ಪಲಾಯನ ಗೈದರು.
ಆದರೆ ಅವರೆಲ್ಲಾ ಬಿಲ್ಲುಗಳಿಲ್ಲದೆ ಹಿಡಿಯಲ್ಪ
ಟ್ಟರು. ನಿಮ್ಮ ಎಲ್ಲಾ ಅಧಿಕಾರಿಗಳು ಒಟ್ಟಾಗಿ ಬಹು
ದೂರಪ್ರದೇಶಗಳಿಗೆ ಓಡಿದರು. ಆದರೆ ಅವರೆಲ್ಲಾ
ಹಿಡಿಯಲ್ಪಟ್ಟರು.
4 ಆದುದರಿಂದ ನಾನು ಹೇಳುವುದೇನೆಂದರೆ:
‘‘ನೀವು ನನ್ನ ಕಡೆಗೆ ನೋಡಬೇಡಿ! ನನ್ನನ್ನು ಅಳಲು
ಬಿಡಿರಿ! ಜೆರುಸಲೇಮಿನ ನಾಶನದ ಕುರಿತಾಗಿ
ನನ್ನನ್ನು ಕೂಡಲೇ ಸಂತೈಸಬೇಡಿರಿ.’’

5ಯೆಹೋವನು ಒಂದು ವಿಶೇಷದಿನವನ್ನು ಆರಿಸಿರು
ತ್ತಾನೆ. ಆ ದಿವಸದಲ್ಲಿ ಗಲಭೆ ಮತ್ತು ಗಲಿಬಿಲಿಯು ಇರು
ವದು. ದಿವ್ಯದರ್ಶನದ ಬಯಲಿನಲ್ಲಿ ಜನರು ಒಬ್ಬರ
ನ್ನೊಬ್ಬರು ತುಳಿದುಕೊಂಡು ಅವರ ಮೇಲೆಯೇ ನಡೆದು
ಕೊಂಡು ಹೋಗುವರು. ನಗರದ ಕೋಟೆಗೋಡೆಗಳು
ಕೆಡವಲ್ಪಡುವವು. ಬಯಲಿನಲ್ಲಿ ವಾಸಿಸುವ ಜನರು
ಬೆಟ್ಟದ ಮೇಲಿನ ನಗರದ ಜನರಿಗೆ ಚೀರಾಡುವರು.
6ಏಲಾಮಿನ ಅಶ್ವಸೈನಿಕರು ತಮ್ಮ ಬತ್ತಳಿಕೆಯನ್ನು ತೆಗೆದು
ಕೊಂಡು ರಣರಂಗಕ್ಕೆ ಹೊರಡುವರು. ಕೀರ್ ಸ್ಥಳದ
ಜನರು ತಮ್ಮ ಗುರಾಣಿಗಳಿಂದ ಶಬ್ದಮಾಡುವರು. 7ಸೈನ್ಯ
ಗಳು ನಿಮ್ಮ ವಿಶೇಷವಾದ ಕಣಿವೆಯಲ್ಲಿ ಎದುರುಬದು
ರಾಗಿ ಬೇಟಿಯಾಗುವರು. ಕಣಿವೆಯು ರಥಗಳಿಂದ
ತುಂಬಿಹೋಗುವದು. ಅಶ್ವದಳದವರನ್ನು ದ್ವಾರದ
ಮುಂದೆ ನಿಲ್ಲಿಸಲಾಗುವದು. 8ಆ ಸಮಯದಲ್ಲಿ
ಯೆಹೂದದ ಜನರು ತಾವು ಕಾಡಿನ ಅರಮನೆಯಲ್ಲಿಟ್ಟಿದ್ದ
ಆಯುಧಗಳನ್ನು ಉಪಯೋಗಿಸುವುದಕ್ಕೆ ಮನಸ್ಸು
ಮಾಡುವರು.

ಯೆಹೂದವನ್ನು ರಕ್ಷಿಸುವ ಗೋಡೆಗಳನ್ನು ಶತ್ರುಗಳು
ಕೆಡವಿಹಾಕುವರು. 9-11ದಾವೀದನಗರದ ಕೋಟೆ
ಗೋಡೆಗಳಲ್ಲಿ ಬಿರುಕುಗಳು ಉಂಟಾಗುವವು. ಆ
ಬಿರುಕುಗಳನ್ನು ನೀವು ಸ್ಪಷ್ಟವಾಗಿ ಕಾಣಬಹುದು. ಅದ
ರೊಳಗಿರುವ ಮನೆಗಳನ್ನು ಲೆಕ್ಕ ಮಾಡಬಹುದು. ಆ ಮನೆ
ಗಳ ಕಲ್ಲುಗಳನ್ನು ತೆಗೆದು ಬಿರುಕು ಮುಚ್ಚಲಾಗುವದು.
ಎರಡು ಸಾಲು ಕೋಟೆಗೋಡೆಗಳ ಮಧ್ಯದಲ್ಲಿ ಹಳೆಯ
ಕಾಲಿವೆಯ ಮೂಲಕ ನೀರನ್ನು ತರಿಸಿ ಆ ನೀರನ್ನು
ಉಳಿತಾಯ ಮಾಡುವಿರಿ.

ಇವೆಲ್ಲವನ್ನು ನೀವು ನಿಮ್ಮನ್ನು ಸಂರಕ್ಷಿಸಿಕೊಳ್ಳುವದ
ಕೋಸ್ಕರ ಮಾಡುವಿರಿ. ಆದರೆ ಇವೆಲ್ಲವನ್ನು ನಿರ್ಮಿಸಿದ
ದೇವರ ಮೇಲೆ ನೀವು ನಂಬಿಕೆ ಇಡುವದಿಲ್ಲ. ಇದನ್ನು
ಬಹಳ ಕಾಲದ ಹಿಂದೆ ನಿರ್ಮಿಸಿದ ದೇವರನ್ನು ನೀವು
ನೋಡುವದಿಲ್ಲ.

12ನನ್ನ ಒಡೆಯನೂ ಸರ್ವಶಕ್ತನೂ ಆಗಿರುವ ಯೆಹೋ
ವನು ಜನರಿಗೆ, ಅವರ ಸತ್ತುಹೋದ ಸ್ನೇಹಿತರಿಗೋಸ್ಕರ
ರೋಧಿಸಿ ದುಃಖಿಸಿರಿ ಎಂದು ಹೇಳುವನು. ಜನರು ತಮ್ಮ
ತಲೆಗಳನ್ನು ಬೋಳಿಸಿ ಶೋಕವಸ್ತ್ರವನ್ನು ಧರಿಸುವರು.
13ಇಗೋ, ಈಗ ಜನರು ಸಂತೋಷಪಡುತ್ತಿದ್ದಾರೆ.

ಅವರು ಹರ್ಷಿಸುತ್ತಾ ದನ ಕುರಿಗಳನ್ನು
ಕೊಯ್ಯಿರಿ, ನಾವು ಹಬ್ಬ ಆಚರಿಸೋಣ, ಊಟ
ಮಾಡಿ ದ್ರಾಕ್ಷಾರಸ ಕುಡಿಯೋಣ, ತಿಂದು,
ಕುಡಿದು ಸಂತೋಷವಾಗಿರೋಣ. ಯಾಕೆಂದರೆ
ನಾಳೆ ನಾವು ಸಾಯುವೆವು ಎಂದು ಹೇಳುವರು.

[14]ಸರ್ವಶಕ್ತನಾದ ಯೆಹೋವನು ನನಗೆ ತಿಳಿಸಿದ ಈ ಮಾತುಗಳನ್ನು ಕಿವಿಯಾರೆ ಕೇಳಿದೆನು: ''ನೀವು ಕೆಟ್ಟ ಕಾರ್ಯಗಳನ್ನು ನಡೆಸಿ ಅಪರಾಧಿಗಳಾಗಿರುವಿರಿ. ನಿಮ್ಮ ದುಷ್ಟತ್ವವು ಕ್ಷಮಿಸಲ್ಪಡುವ ಮುಂಚೆ ನೀವು ಸಾಯುವಿರಿ ಎಂದು ಖಂಡಿತವಾಗಿ ಹೇಳುತ್ತೇನೆ.''ಇದು ನನ್ನ ಒಡೆಯನಾದ ಸರ್ವಶಕ್ತನ ನುಡಿಗಳು.

## ಶೆಬ್ನಕ್ಕೆ ದೇವರ ಸಂದೇಶ

[15]ನನ್ನ ಒಡೆಯನೂ ಸರ್ವಶಕ್ತನೂ ಆದ ಯೆಹೋವನು, ''ಸೇವಕನಾದ ಶೆಬ್ನನ ಬಳಿಗೆ ಹೋಗು. ಅವನು ಅರಮನೆಯ ಮೇಲ್ವಿಚಾರಕನಾಗಿದ್ದಾನೆ.
[16]ಆ ಸೇವಕನನ್ನು 'ನೀನಿಲ್ಲಿ ಏನು ಮಾಡುತ್ತಿರುವೆ? ನಿನ್ನ ಕುಟುಂಬದವರಲ್ಲಿ ಯಾರನ್ನಾದರೂ ಇಲ್ಲಿ ಸಮಾಧಿ ಮಾಡಿರುವಿಯಾ? ಇಲ್ಲಿ ಸಮಾಧಿಯನ್ನು ಯಾಕೆ ನಿರ್ಮಿಸಿರುವೆ?'' ಎಂದು ಕೇಳು.

ಅದಕ್ಕೆ ಯೆಶಾಯನು,'' ಈ ಮನುಷ್ಯನನ್ನು ನೋಡು. ಅವನು ತನ್ನ ಸಮಾಧಿಯನ್ನು ಎತ್ತರವಾದ ಸ್ಥಳದಲ್ಲಿ ಸಿದ್ಧಪಡಿಸುತ್ತಿದ್ದಾನೆ. ಅವನು ಸಮಾಧಿ ಸಿದ್ಧಪಡಿಸಲು ಬಂಡೆಯನ್ನು ಕೊರೆಯುತ್ತಿದ್ದಾನೆ.

[17-18]''ಮನುಷ್ಯನೇ, ಯೆಹೋವನು ನಿನ್ನನ್ನು ದ್ವಂಸ ಮಾಡುವನು. ಅತನು ನಿನ್ನನ್ನು ಚೆಂಡಿನಂತೆ ಉರುಳಿಸಿ ಬಹುದೂರಕ್ಕೆ ಅಂದರೆ ಬೇರೊಂದು ದೇಶದ ತೆರೆದ ತೋಳುಗಳಿಗೆ ಎಸೆದುಬಿಡುವನು. ಅಲ್ಲಿ ನೀನು ಸಾಯುವೆ.''ಎಂದು ಹೇಳಿದನು.

ಅದಕ್ಕೆ ಯೆಹೋವನು, ''ನೀನು ನಿನ್ನ ರಥಗಳಲ್ಲಿ ಹೆಚ್ಚಳಪಡುತ್ತಿರುವೆ. ಆದರೆ ಆ ದೂರದೇಶದಲ್ಲಿರುವ ನಿನ್ನ ಹೊಸ ಅರಸನ ಬಳಿಯಲ್ಲಿ ಇದಕ್ಕಿಂತಲೂ ಶ್ರೇಷ್ಠವಾದ ರಥಗಳಿವೆ. ಅವನ ಅರಮನೆಯಲ್ಲಿ ನಿನ್ನ ರಥಗಳು ಮುಖ್ಯವಾದವುಗಳಾಗಿರುವುದಿಲ್ಲ.
[19]ಇಲ್ಲಿ ನೀನಿರುವ ಮುಖ್ಯ ಹುದ್ದೆಯಿಂದ ನಿನ್ನನ್ನು ತಳ್ಳಿಬಿಡುವೆನು. ನಿನ್ನ ಹೊಸ ಅರಸನು ನಿನ್ನನ್ನು ಆ ಹುದ್ದೆಯಿಂದ ತೆಗೆದು ಬಿಡುವನು.
[20]ಆ ಸಮಯದಲ್ಲಿ ನನ್ನ ಸೇವಕನೂ ಹಿಲ್ಕೀಯನ ಮಗನೂ ಆದ ಎಲ್ಯಾಕೀಮನನ್ನು ನಾನು ಕರೆಯುವೆನು.
[21]ನಿನ್ನ ಬಟ್ಟೆಯನ್ನು ತೆಗೆದು ಆ ಸೇವಕನಿಗೆ ಕೊಡುವೆನು. ನಿನ್ನ ರಾಜದಂಡವನ್ನು ಅವನಿಗೆ ಕೊಡುವೆನು. ನಿನ್ನ ವಿಶೇಷ ಹುದ್ದೆಯನ್ನು ಅವನಿಗೆ ಕೊಡುವೆನು. ಆ ಸೇವಕನು ಯೆಹೂದದ ಜನರಿಗೂ ಜೆರುಸಲೇಮಿನ ಜನರಿಗೂ ತಂದೆಯಂತಿರುವನು.''

[22]''ದಾವೀದನ ಮನೆಯ ಬೀಗವನ್ನು ಅವನ ಕುತ್ತಿಗೆಯಲ್ಲಿರಿಸುವೆನು. ಅವನು ಒಂದು ಬಾಗಿಲನ್ನು ತೆರೆದರೆ ಅದು ತೆರೆದೇ ಇರುವದು. ಅದನ್ನು ಯಾರೂ ಮುಚ್ಚಲಾರರು. ಅವನು ಒಂದು ಕದವನ್ನು ಮುಚ್ಚಿದರೆ ಅದು ಮುಚ್ಚಿಯೇ ಇರುವದು. ಅದನ್ನು ತೆರೆಯಲು ಯಾರಿಂದಲೂ ಆಗುವದಿಲ್ಲ. ಆ ಸೇವಕನು ತನ್ನ ತಂದೆಯ ಮನೆಯ ಶ್ರೇಷ್ಠವಾದ ಆಸನದಂತಿರುವನು.
[23]ಒಂದು ಗಟ್ಟಿಯಾದ ಹಲಗೆಯಲ್ಲಿ ಮೊಳೆಯನ್ನು ಹೊಡೆದು ಗಟ್ಟಿಯಾಗಿರಿಸುವಂತೆ ಅವನನ್ನು ನಾನು ಬಲಪಡಿಸುವೆನು.
[24]ಅವನ ತಂದೆಯ ಮನೆಯ ಎಲ್ಲಾ ವಿಶೇಷ ಸಂಗತಿಗಳನ್ನು, ವಸ್ತುಗಳನ್ನು ಅವನಿಗೆ ತೂಗುಹಾಕುವರು. ಎಲ್ಲಾ ಹಿರಿಕಿರಿಯರು ಅವನ ಮೇಲೆ ಆತುಕೊಂಡಿರುವರು. ಅವರು ಅವನಿಗೆ ತೂಗುಹಾಕಲ್ಪಟ್ಟ ಚಿಕ್ಕಚಿಕ್ಕ ಪಾತ್ರೆಗಳಂತೆಯೂ ನೀರಿನ ದೊಡ್ಡ ಸೀಸೆಗಳಂತೆಯೂ ಇರುವರು.

[25]''ಆ ಸಮಯದಲ್ಲಿ ಹಲಗೆಗೆ ಬಲವಾಗಿ ಹೊಡೆಯಲ್ಪಟ್ಟ ಆ ಮೊಳೆಯು (ಶೆಬ್ನ) ಬಲಹೀನವಾಗಿ ತುಂಡಾಗುವದು. ಆ ಮೊಳೆಯು ನೆಲಕ್ಕೆ ಬಿದ್ದು ನಾಶವಾಗುವದು. ಆಗ ಆ ಮೊಳೆಗೆ ತೂಗುಹಾಕಿದ್ದೆಲ್ಲವೂ ಅದರೊಂದಿಗೆ ನೆಲಕ್ಕೆ ಬೀಳುವದು. ಆಗ ನಾನು ಈ ಸಂದೇಶದಲ್ಲಿ ಹೇಳಿದ್ದೆಲ್ಲವೂ ಸಂಭವಿಸುವದು.'' (ಅವುಗಳು ನೆರವೇರುತ್ತವೆ ಯಾಕೆಂದರೆ ಅವುಗಳನ್ನು ಹೇಳಿದಾತನು ಯೆಹೋವನೇ.)

## ಲೆಬನೋನಿಗೆ ದೇವರ ಸಂದೇಶ

23 ತೂರಿನ ವಿಷಯವಾಗಿ ದುಃಖಕರವಾದ ಸಂದೇಶ: ತಾರ್ಷೀಷಿನ ಹಡಗುಗಳೇ, ದುಃಖಿಸಿರಿ! ನಿಮ್ಮ ರೇವು ಕೆಡವಲ್ಪಟ್ಟಿದೆ, (ಕಿತ್ತಿಮಿನಿಂದ ಹೊರಟ ಹಡಗುಗಳಿಗೆ ಈ ವಾರ್ತೆಯು ತಲುಪಿತು.)

[2]ಸಮುದ್ರ ತೀರದಲ್ಲಿ ವಾಸಿಸುವ ಜನರೇ, ನೀವು ಸ್ತಬ್ಧರಾಗಿದ್ದು ದುಃಖಿಸಿರಿ. ತೂರು ''ಚೀದೋನಿನ ವ್ಯಾಪಾರಿ'' ಆಗಿತ್ತು. ಆ ನಗರವು ವರ್ತಕರನ್ನು ಸಮುದ್ರದಾಚೆ ಕಳುಹಿಸಿತು. ಆ ಜನರು ನಿನ್ನನ್ನು ಐಶ್ವರ್ಯಗಳಿಂದ ತುಂಬಿಸಿತು.
[3]ಆವರು ಸಮುದ್ರ ಪ್ರಯಾಣ ಮಾಡುತ್ತಾ ಧಾನ್ಯಕ್ಕಾಗಿ ಹುಡುಕುತ್ತಿದ್ದಾರೆ. ತೂರಿನ ಜನರು ನೈಲ್ ನದಿಯ ಬದಿಗಳಲ್ಲಿ ಬೆಳೆಸುವ ಧಾನ್ಯವನ್ನು ಕೊಂಡುಕೊಂಡು ಇತರ ದೇಶಗಳವರಿಗೆ ಮಾರುವರು.

[4]ಚೀದೋನೇ, ನೀನು ತುಂಬಾ ದುಃಖದಿಂದಿರಬೇಕು. ಯಾಕೆಂದರೆ ಸಮುದ್ರವೂ, ಸಮುದ್ರದ ಕೋಟೆಯೂ ಹೇಳುವದೇನೆಂದರೆ:

ನನಗೆ ಮಕ್ಕಳಿಲ್ಲ, ನಾನು ಪ್ರಸವವೇದನೆ ಅನುಭವಿಸಲಿಲ್ಲ. ನಾನು ಮಕ್ಕಳನ್ನು ಹೆರಲಿಲ್ಲ. ನಾನು ಗಂಡುಮಕ್ಕಳನ್ನಾಗಲೀ, ಹೆಣ್ಣುಮಕ್ಕಳನ್ನಾಗಲೀ ಬೆಳೆಸಲಿಲ್ಲ.

5 ತೂರಿನ ವಿಷಯವಾದ ವಾರ್ತೆಯನ್ನು ಈಜಿಪ್ಟು
ಕೇಳಿಸಿಕೊಳ್ಳುವದು. ಆ ವರ್ತಮಾನವು ಈಜಿಪ್ಟನ್ನು
ದುಃಖದಲ್ಲಿ ಮುಳುಗಿಸುವದು.
6 ಹಡಗುಗಳೇ, ನೀವು ತಾರ್ಷೀಷಿಗೆ ಹಿಂದಿರುಗಿರಿ.
ಸಮುದ್ರ ತೀರದಲ್ಲಿ ವಾಸಿಸುವವರಾದ ನೀವು
ದುಃಖಿಸಬೇಕು.
7 ಹಿಂದಿನ ಕಾಲದಲ್ಲಿ ನೀವು ತೂರ್ ನಗರದಲ್ಲಿ
ಉಲ್ಲಾಸಿಸಿದಿರಿ. ಪ್ರಾರಂಭದಿಂದಲೇ ಆ ನಗರವು
ಅಭಿವೃದ್ಧಿಹೊಂದುತ್ತಿತ್ತು. ಆ ನಗರದ ಜನರು
ಬಹುದೂರ ಪ್ರಯಾಣಮಾಡಿ ನೆಲೆಸಿರುವರು.
8 ತೂರ್ ಪಟ್ಟಣವು ಅನೇಕ ಗಣ್ಯವ್ಯಕ್ತಿಗಳನ್ನು ಕೊಟ್ಟಿ
ರುತ್ತದೆ. ಅಲ್ಲಿಯ ವರ್ತಕರಿಗೆ ಎಲ್ಲಿಯೂ ಗೌರವ
ವಿದೆ. ಆದುದರಿಂದ ತೂರ್ ವಿರುದ್ಧ ಯೋಜನೆ
ಮಾಡಿದವರಾರು?
9 ಸರ್ವಶಕ್ತನಾದ ಯೆಹೋವನೇ. ಅದು ಪ್ರಾಮುಖ್ಯ
ವಾಗದಂತೆ ಆತನೇ ತೀರ್ಮಾನಿಸಿದ್ದಾನೆ.
10 ತಾರ್ಷೀಷಿನ ಹಡಗಿನವರೇ, ನೀವು ಊರಿಗೆ
ಹಿಂತಿರುಗಿರಿ. ಸಮುದ್ರವನ್ನು ಸಣ್ಣ ಹೊಳೆಯೋ
ಎಂಬಂತೆ ದಾಟಿರಿ. ಯಾರೂ ನಿಮ್ಮನ್ನು ನಿಲ್ಲಿಸ
ಲಾರರು.
11 ಯೆಹೋವನು ಸಮುದ್ರದ ಮೇಲೆ ತನ್ನ ಕೈಯನ್ನು
ಚಾಚಿದ್ದಾನೆ. ಆತನು ತೂರಿಗೆ ವಿರುದ್ಧವಾಗಿ ಯುದ್ಧ
ಮಾಡಲು ರಾಜ್ಯಗಳನ್ನು ಒಟ್ಟುಗೂಡಿಸುತ್ತಾನೆ.
ಯೆಹೋವನು ಕಾನಾನಿಗೆ ತೂರನ್ನು ನಾಶ
ಮಾಡಲು ಆಜ್ಞಾಪಿಸುತ್ತಾನೆ. ಅದು ಆಕೆಯ
ಆಶ್ರಯಸ್ಥಾನ.
12 ಯೆಹೋವನು ಹೇಳುವದೇನೆಂದರೆ,
‘‘ಚೀದೋನ್ ಕುಮಾರಿಯೇ, ನೀನು ನಾಶ
ವಾಗುವೆ; ಎಂದಿಗೂ ನೀನು ಹರ್ಷಿಸುವದಿಲ್ಲ.’’
ತೂರಿನ ಜನರು, ‘‘ನಮಗೆ ಸೈಪ್ರಸ್‌ನವರು
ಸಹಾಯ ಮಾಡುತ್ತಾರೆ’’ ಎಂದು ಹೇಳುತ್ತಾರೆ.
ಆದರೆ ನೀನು ಸಮುದ್ರ ಮಾರ್ಗವಾಗಿ ಸೈಪ್ರಸ್‌ಗೆ
ಹೋದರೆ ಅಲ್ಲಿ ನಿನಗೆ ವಿಶ್ರಮಿಸಲು ಸ್ಥಳ
ದೊರಕುವದಿಲ್ಲ.’’
13 ಆಗ ತೂರಿನ ಜನರು ಹೀಗೆನ್ನುವರು: ‘‘ಬಾಬಿಲೋ
ನಿನವರು ನಮಗೆ ಸಹಾಯಮಾಡುವರು.’’ ಆದರೆ
ಕಸ್ದೀಯರ ದೇಶವನ್ನು ನೋಡಿ. ಬಾಬಿಲೋನ್
ಈಗ ದೇಶವಲ್ಲ. ಬಾಬಿಲೋನನ್ನು ಅಶ್ಶೂರವು
ವಶಪಡಿಸಿಕೊಂಡು ಅದರ ಸುತ್ತಲೂ ಕಾವಲು
ಬುರುಜುಗಳನ್ನು ಕಟ್ಟಿಸಿದೆ. ಅಲ್ಲಿದ್ದ ಸುಂದರ ಮನೆ
ಗಳಿಂದ ಸೈನಿಕರು ಎಲ್ಲವನ್ನು ದೋಚಿರುತ್ತಾರೆ.
ಅಶ್ಶೂರ ಬಾಬಿಲೋನನ್ನು ವನ್ಯಪ್ರಾಣಿಗಳ ವಾಸ
ಸ್ಥಳವನ್ನಾಗಿ ಮಾಡಿದೆ. ಅವರು ಬಾಬಿಲೋನನ್ನು
ಪಾಳುಬಿದ್ದ ಅವಶೇಷವನ್ನಾಗಿ ಮಾಡಿದ್ದಾರೆ.
14 ಆದುದರಿಂದ ತಾರ್ಷೀಷಿನ ಹಡಗುಗಳವರೇ,
ದುಃಖಿಸಿರಿ! ನಿಮ್ಮ ಆಶ್ರಯದ ರೇವು ನಾಶವಾಗಿದೆ.

[15]ಎಪ್ಪತ್ತು ವರ್ಷಗಳ ತನಕ ಜನರಿಗೆ ತೂರಿನ ಜ್ಞಾಪಕ
ವಿರುವದಿಲ್ಲ. (ಇದು ಒಬ್ಬ ಅರಸನು ಆಳುವ ಕಾಲ.)
ಎಪ್ಪತ್ತು ವರ್ಷಗಳ ತರುವಾಯ ತೂರ್ ಈ ಹಾಡಿನ
ಲ್ಲಿರುವ ವೇಶ್ಯೆಯಂತಿರುವದು.

16 ಪುರುಷರು ಮರೆತಿರುವ ಹೆಂಗಸೇ, ನಿನ್ನ ಕಿನ್ನರಿ
ಯನ್ನು ತೆಗೆದುಕೊಂಡು ಊರೊಳಗೆ ಹೋಗಿ,
ನಿನ್ನ ಹಾಡನ್ನು ನುಡಿಸು. ಮತ್ತೆಮತ್ತೆ ಹಾಡು.
ಒಂದು ವೇಳೆ ಆಗ ಜನರು ನಿನ್ನನ್ನು ನೆನಪು
ಮಾಡಿಕೊಳ್ಳ ಬಹುದು.

[17]ಎಪ್ಪತ್ತು ವರುಷಗಳ ನಂತರ ಯೆಹೋವನು ತೂರಿನ
ಕುರಿತು ಮತ್ತೆ ಆಲೋಚಿಸಿ ತೀರ್ಮಾನಿಸುವನು. ತೂರಿ
ನಲ್ಲಿ ವ್ಯಾಪಾರವು ಮತ್ತೆ ಪ್ರಾರಂಭವಾಗುವದು. ಅದು
ಲೋಕದ ಎಲ್ಲಾ ರಾಜ್ಯಗಳಿಗೆ ವೇಶ್ಯೆಯಂತಿದೆ. [18]ಆದರೆ
ಆಕೆ ತಾನು ಗಳಿಸಿದ ಹಣವನ್ನು ತನ್ನಲ್ಲಿ ಇಟ್ಟುಕೊಳ್ಳುವ
ದಿಲ್ಲ. ತೂರ್ ತನ್ನ ವ್ಯಾಪಾರದಲ್ಲಿ ಗಳಿಸಿದ ಲಾಭವನ್ನು
ಯೆಹೋವನಿಗಾಗಿ ಶೇಖರಿಸಿಟ್ಟಿದ್ದಾಳೆ. ಯೆಹೋವನನ್ನು
ಸೇವಿಸುವವರಿಗೆ ಆ ಲಾಭವನ್ನು ಮೀಸಲಾಗಿಟ್ಟಿದ್ದಾಳೆ.
ಹೀಗೆ ಯೆಹೋವನ ಸೇವಕರು ಹೊಟ್ಟೆ ತುಂಬ ಊಟ
ಮಾಡುವರು, ಒಳ್ಳೆಯ ಬಟ್ಟೆ ಧರಿಸಿಕೊಳ್ಳುವರು.

### ದೇವರು ಇಸ್ರೇಲನ್ನು ಶಿಕ್ಷಿಸುವನು

24 ಇಗೋ, ಯೆಹೋವನು ಈ ದೇಶವನ್ನು ನಾಶ
ಮಾಡುವನು. ಆತನು ಅದನ್ನು ಸಂಪೂರ್ಣ
ವಾಗಿ ನಿರ್ಮೂಲ ಮಾಡುವನು. ಜನರನ್ನು ಅತಿದೂರಕ್ಕೆ
ಚದರಿಸಿಬಿಡುವನು.
[2]ಆ ಸಮಯದಲ್ಲಿ ಸಾಧಾರಣ ಜನರಿಗೂ ಯಾಜಕ
ವರ್ಗದವರಿಗೂ ವ್ಯತ್ಯಾಸವಿರದು. ಸೇವಕರಿಗೂ ಅವರ
ಯಜಮಾನರಿಗೂ ವ್ಯತ್ಯಾಸವಿರದು. ದಾಸಿಯರಿಗೂ
ಅವರ ಯಜಮಾನಿಗಳಿಗೂ ವ್ಯತ್ಯಾಸವಿರದು. ಮಾರುವವ
ರಿಗೂ ಕೊಳ್ಳುವವರಿಗೂ ವ್ಯತ್ಯಾಸವಿರದು. ಸಾಲಕೊಡುವ
ವರಿಗೂ ಸಾಲ ತೆಗೆದುಕೊಳ್ಳುವವರಿಗೂ ವ್ಯತ್ಯಾಸವಿರದು.
ಬಡ್ಡಿಹಾಕುವವನಿಗೂ ಬಡ್ಡಿಕೊಡುವವನಿಗೂ ವ್ಯತ್ಯಾಸ
ವಿರದು. [3]ಎಲ್ಲಾ ಜನರು ದೇಶದಿಂದ ಹೊರಕ್ಕೆ ಹಾಕಲ್ಪ
ಡುವರು. ದೇಶದ ಸಂಪತ್ತನ್ನು ಕಿತ್ತುಕೊಳ್ಳಲಾಗುವದು.
ಇದು ಯೆಹೋವನ ಆಜ್ಞೆಯಾಗಿರುವದರಿಂದ ನೆರ

ವೇರುವದು. 4ದೇಶವು ನಿರ್ಜನವಾಗಿ ಶೋಕಿಸುವದು.
ಇಡೀ ಪ್ರಪಂಚವೇ ನಿರ್ಜನವಾಗಿ ಬಲಹೀನವಾಗುವದು.
ಈ ಪ್ರಪಂಚದ ಪ್ರಸಿದ್ಧ ಜನರೂ ಬಲಹೀನರಾಗುವರು.
5ದೇಶದ ಜನರು ದೇವರ ಉಪದೇಶಗಳಿಗೆ ವಿರುದ್ಧ
ವಾಗಿ ನಡೆದು ತಮ್ಮ ದೇಶವನ್ನು ಹೊಲಸುಮಾಡಿದರು.
ದೇವರ ಕಟ್ಟಳೆಗಳನ್ನು ಅವರು ಅನುಸರಿಸಲಿಲ್ಲ. ಬಹಳ
ಕಾಲದ ಹಿಂದೆ ಜನರು ದೇವರೊಂದಿಗೆ ಒಡಂಬಡಿಕೆ
ಮಾಡಿಕೊಂಡರು. ಆದರೆ ಆ ಜನರು ಆ ಒಡಂಬಡಿಕೆ
ಯನ್ನು ಮುರಿದರು. 6ಈ ದೇಶದಲ್ಲಿ ವಾಸಿಸುವ ಜನರು
ದೇವರಿಗೆ ವಿರುದ್ಧವಾಗಿ ನಡೆದರು. ಆದುದರಿಂದ
ದೇವರು ಈ ದೇಶವನ್ನು ನಾಶಮಾಡಲು ತೀರ್ಮಾನಿಸಿ
ದನು. ಜನರು ಶಿಕ್ಷಿಸಲ್ಪಡುವರು. ಕೆಲವೇ ಮಂದಿ ಮಾತ್ರ
ಉಳಿಯುವರು.

7ದ್ರಾಕ್ಷೆಬಳ್ಳಿಗಳು ಸಾಯುತ್ತಲಿವೆ. ಹೊಸ ದ್ರಾಕ್ಷಾ
ರಸವು ಹುಳಿಯಾಗಿದೆ. ಹಿಂದಿನ ಕಾಲದಲ್ಲಿ ಜನರು ಹರ್ಷ
ಭರಿತರಾಗಿದ್ದರು. ಆದರೆ ಈಗ ಆ ಜನರು ದುಃಖದಲ್ಲಿರು
ತ್ತಾರೆ. 8ಅವರು ತಮ್ಮ ಸಂತೋಷವನ್ನು ವ್ಯಕ್ತಪಡಿಸುವ
ದಿಲ್ಲ. ಸಂತಸದ ಗದ್ದಲವು ಕೇಳಿಸುವದಿಲ್ಲ. ಆ ಶಬ್ದಗಳೆಲ್ಲಾ
ನಿಂತುಹೋಗಿವೆ. ಹಾರ್ಪ್‌ವಾದ್ಯದ ಮತ್ತು ದಮ್ಮಡಿಗಳ
ಶಬ್ದವು ನಿಂತಿದೆ. 9ಜನರು ದ್ರಾಕ್ಷಾರಸ ಕುಡಿಯುತ್ತಿರು
ವಾಗ ಹಾಡು ಹಾಡುವುದಿಲ್ಲ. ಅವರು ಕುಡಿಯುವ
ಮದ್ಯವು ಅವರಿಗೆ ಕಹಿಯಾಗಿದೆ.

10ಈ ನಗರಕ್ಕೆ ‘‘ಪೂರ್ಣ ಗಲಿಬಿಲಿ’’ ಎಂಬುದೇ ತಕ್ಕ
ಹೆಸರು. ನಗರವು ಕೆಡವಲ್ಪಟ್ಟಿತು. ಜನರು ಮನೆಗಳಿಗೆ
ಪ್ರವೇಶಿಸಲಿಕ್ಕಾಗದು. ಕದಗಳನ್ನು ತೆರೆಯಲು ಸಾಧ್ಯ
ವಾಗದು. 11ಮಾರುಕಟ್ಟೆಗಳಲ್ಲಿ ಜನರು ಈಗಲೂ
ದ್ರಾಕ್ಷಾರಸವನ್ನು ಕೇಳುವರು. ಆದರೆ ಸಂತೋಷವೇ
ಹೋಗಿ ಬಿಟ್ಟಿದೆ. ಹರ್ಷವು ಬಹುದೂರ ಒಯ್ಯಲ್ಪಟ್ಟಿದೆ.
12ನಗರಕ್ಕೆ ನಾಶನವು ಕಾದಿದೆ; ಪುರದ್ವಾರವು ನಜ್ಜು
ಗುಜ್ಜಾಗಿದೆ.

13 ಕೊಯ್ಯುವ ಕಾಲದಲ್ಲಿ ಜನರು ಆಲೀವ್ ಮರ
ಗಳನ್ನು ಹೊಡೆದು ಕಾಯಿಗಳನ್ನು ಉದುರಿಸು
ವರು. ಆದರೆ ಕೆಲವು ಕಾಯಿಗಳು ಮರದಲ್ಲಿ ಉಳಿ
ಯುವವು. ಜನಾಂಗಗಳ ಮಧ್ಯದಲ್ಲಿ ದೇಶವೂ
ಹೀಗೆಯೇ ಇರುವದು.

14 ಉಳಿದ ಜನರು ಚೀರಾಡುವರು. ಅದು ಭೋರ್ಗ
ರೆಯುವ ಸಮುದ್ರದ ಶಬ್ದಕ್ಕಿಂತಲೂ ಜೋರಾಗಿ
ಕೇಳಿಸುವದು. ದೇವರ ಕೃಪೆಯ ನಿಮಿತ್ತ ಅವರು
ಸಂತೋಷದಲ್ಲಿರುವರು.

15 ಆ ಜನರು ‘‘ಪೂರ್ವದಲ್ಲಿರುವ ಜನರೇ, ದೇವರಿಗೆ
ಸ್ತೋತ್ರ ಮಾಡಿರಿ! ದೂರ ದೇಶಗಳಲ್ಲಿರುವ
ಜನರೇ, ಇಸ್ರೇಲರ ದೇವರಾದ ಯೆಹೋವನ
ಹೆಸರನ್ನು ಕೊಂಡಾಡಿರಿ’’ ಎಂದು ಹೇಳುವರು.

16 ದೇವರ ಸ್ತುತಿಯನ್ನು ನಾವು ಭೂಮಿಯ ಎಲ್ಲಾ
ಕಡೆಗಳಿಂದಲೂ ಕೇಳಿಸಿಕೊಳ್ಳುತ್ತೇವೆ. ಆ ಸ್ತುತಿ
ಹಾಡುಗಳು ದೇವರ ಒಳ್ಳೆತನವನ್ನು ವರ್ಣಿಸುವವು.
ಆದರೆ ನಾನು, ‘‘ಸಾಕು, ನನಗೆ ಸಾಕು. ನಾನು
ನೋಡುವ ವಿಷಯಗಳು ಭಯಂಕರವಾಗಿದೆ.
ದ್ರೋಹಿಗಳು ಜನರಿಗೆ ವಿರುದ್ಧವಾಗಿ ಎದ್ದು
ಅವರಿಗೆ ಹಾನಿಮಾಡುವರು.

17 ಈ ದೇಶದಲ್ಲಿ ವಾಸಿಸುವ ಜನರಿಗೆ ಅಪಾಯವು
ಕಾದಿದೆ ಎಂದು ನನಗೆ ತೋರುತ್ತಿದೆ. ಅವರಿಗೆ
ಭಯ, ಉರುಲು, ಗುಂಡಿಗಳು ಕಾದಿದೆ.

18 ಜನರು ಅಪಾಯದ ವಿಷಯ ಕೇಳಿ ಭಯಗ್ರಸ್ಥ
ರಾಗುವರು. ಕೆಲವರು ಓಡಿಹೋಗುವರು. ಆದರೆ
ಅವರು ಗುಂಡಿಯೊಳಗೆ ಬಿದ್ದು ಸಿಕ್ಕಿಕೊಳ್ಳುವರು.
ಅವರಲ್ಲಿ ಕೆಲವರು ಗುಂಡಿಯಿಂದ ಹೊರ ಬರು
ವರು, ಆದರೆ ಅವರು ಇನ್ನೊಂದು ಉರುಲಿನೊಳಗೆ
ಸಿಕ್ಕಿಹಾಕಿಕೊಳ್ಳುವರು. ಆಕಾಶದಲ್ಲಿರುವ ಪ್ರವಾ
ಹದ ದ್ವಾರಗಳು ತೆರೆಯಲ್ಪಡುವವು. ಪ್ರವಾಹವು
ತುಂಬುವದು; ಭೂಮಿಯ ಅಸ್ತಿವಾರಗಳು
ಕದಲುವವು.

19 ಭೂಕಂಪಗಳಾಗುವವು. ಭೂಮಿಯು ಸೀಳಿ
ಹೋಗುವದು.

20 ಲೋಕದ ಪಾಪವು ತುಂಬಾ ಭಾರವಾಗಿದೆ. ಆ
ಭಾರದಿಂದಾಗಿ ಭೂಮಿಯು ಬೀಳುವದು. ಒಂದು
ಹಳೆಯ ಮನೆಯಂತೆ ಭೂಮಿಯು ಅಲು
ಗಾಡುವದು. ಕುಡಿದು ಮತ್ತನಾಗಿ ನೆಲಕ್ಕೆ ಬೀಳುವ
ವನಂತೆ ಭೂಮಿಯು ಇರುವದು. ಭೂಮಿಗೆ
ಮುಂದುವರಿಯಲು ಆಗದು.

21 ಆ ಸಮಯದಲ್ಲಿ ಯೆಹೋವನು ಪರಲೋಕ
ಸೈನ್ಯಕ್ಕೆ ಪರಲೋಕದಲ್ಲಿ ನ್ಯಾಯತೀರಿಸುವನು.
ಭೂಮಿಯ ಅರಸರನ್ನು ಭೂಮಿಯ ಮೇಲೆ
ನ್ಯಾಯ ವಿಚಾರಣೆಮಾಡುವನು.

22 ಅನೇಕ ಮಂದಿ ಒಟ್ಟು ಸೇರುವರು. ಕೆಲವರು
ಗುಂಡಿಯಲ್ಲಿ ಸಿಕ್ಕಿಹಾಕಿಕೊಳ್ಳುವರು. ಕೆಲವರು ಸೆರೆ
ಹಿಡಿಯಲ್ಪಡುವರು. ಆಮೇಲೆ ಕೆಲಕಾಲದ ನಂತರ
ಅವರ ನ್ಯಾಯವಿಚಾರಣೆ ನಡಿಯುವದು.

23 ಯೆಹೋವನು ಜೆರುಸಲೇಮಿನ ಚೀಯೋನ್
ಪರ್ವತದಿಂದ ರಾಜ್ಯವನ್ನಾಳುವನು. ಆತನ ಮಹಿ
ಮೆಯು ಹಿರಿಯರ ಮುಂದಿರುವದು. ಆತನ ಮಹಿ
ಮೆಯ ಪ್ರಕಾಶಕ್ಕೆ ಚಂದ್ರನು ನಾಚಿಕೆಕೊಳ್ಳುವನು;
ಸೂರ್ಯನು ಲಜ್ಜೆಗೊಳ್ಳುವನು.

## ದೇವರಿಗೆ ಸ್ತೋತ್ರಗಾನ

25 ಯೆಹೋವನೇ, ನೀನೇ ನನ್ನ ದೇವರು. ನಿನ್ನನ್ನು ಗೌರವಿಸಿ ನಿನ್ನ ನಾಮವನ್ನು ಸ್ತುತಿಸುವೆನು. ನೀನು ಆಶ್ಚರ್ಯಕರವಾದ ಕಾರ್ಯಗಳನ್ನು ಮಾಡಿರುವೆ. ಬಹಳ ಕಾಲದ ಹಿಂದೆ ನೀನು ಹೇಳಿರುವ ವಿಷಯಗಳು ಸತ್ಯವೇ ಸರಿ. ನೀನು ಮುಂತಿಳಿಸಿದಂತೆಯೇ ಎಲ್ಲವೂ ಸಂಭವಿಸಿದವು.

2 ನೀನು ವಿದೇಶದ ಪಟ್ಟಣವನ್ನು ಕೆಡವಿಹಾಕಿರುವೆ. ಆ ಪಟ್ಟಣವು ಮಹಾಗೋಡೆಗಳಿಂದ ಸಂರಕ್ಷಿಸಲ್ಪಟ್ಟದ್ದಾಗಿತ್ತು. ಆದರೆ ಈಗ ಅದು ಕೇವಲ ಕಲ್ಲುಗಳ ರಾಶಿ. ಅರಮನೆಯು ಕೆಡವಲ್ಪಟ್ಟಿದೆ. ಅದನ್ನು ತಿರುಗಿ ಕಟ್ಟಲು ಸಾಧ್ಯವೇ ಇಲ್ಲ.

3 ಬಲಾಢ್ಯ ದೇಶಗಳ ಜನರು ನಿನ್ನನ್ನು ಸನ್ಮಾನಿಸುವರು. ಬಲಿಷ್ಠ ದೇಶಗಳ ಬಲಶಾಲಿಗಳು ನಿನಗೆ ಭಯಪಡುವರು.

4 ಯೆಹೋವನೇ, ನೀನೇ ನಮ್ಮ ಆಶ್ರಯವು. ಬಡವರಿಗೆ ನೀನೇ ಆಧಾರ. ಅವರ ಸಮಸ್ಯೆಗಳು ಅವರನ್ನು ಕಷ್ಟಕ್ಕೆ ಗುರಿಪಡಿಸುವವು. ಆದರೆ ನೀನು ಅವರನ್ನು ಸಂರಕ್ಷಿಸುವೆ. ಯೆಹೋವನೇ, ಒಂದು ಮನೆಯ ಜನರನ್ನು ಪ್ರವಾಹದಿಂದಲೂ, ಬಿಸಿಲಿನ ತಾಪದಿಂದಲೂ ಕಾಪಾಡುವಂತೇ ನೀನಿರುವೆ. ಮುಂದಿನ ತೊಂದರೆಗಳು ಬಿರುಗಾಳಿಯಂತೆಯೂ ಮಳೆಯಂತೆಯೂ ಇವೆ. ಮಳೆಯು ಗೋಡೆಗೆ ಬಡಿದು ಕೆಳಗೆ ಇಳಿಯುವದು. ಆದರೆ ಮನೆಯೊಳಗಿರುವವರಿಗೆ ಹಾನಿಯೇ ಆಗದು.

5 ವೈರಿಯು ಆರ್ಭಟಿಸುತ್ತಾ ಗದ್ದಲ ಮಾಡುತ್ತಾನೆ. ಆ ಭಯಂಕರ ಶತ್ರುವು ಯುದ್ಧಕ್ಕೆ ಬಾ ಎಂದು ಸವಾಲು ಹಾಕುತ್ತಾನೆ. ಆದರೆ ದೇವರೇ, ನೀನು ಅವನನ್ನು ತಡೆಯುವೆ. ಬೇಸಿಗೆ ಕಾಲದಲ್ಲಿ ಮರುಭೂಮಿಯಲ್ಲಿರುವ ಸಸಿಗಳು ಬಾಡಿಹೋಗಿ ನೆಲದ ಮೇಲೆ ಬಿದ್ದುಹೋಗುವವು. ಅದೇ ರೀತಿಯಲ್ಲಿ ನೀನು ವೈರಿಯನ್ನು ಸೋಲಿಸಿ ಅವನು ಮೊಣಕಾಲೂರುವಂತೆ ಮಾಡುವೆ. ಕಾರ್ಮುಗಿಲು ಬೇಸಿಗೆಯ ತಾಪವನ್ನು ನಿವಾರಿಸುವದು. ಅದೇ ರೀತಿಯಲ್ಲಿ ನೀನು ಶತ್ರುವಿನ ಆರ್ಭಟವನ್ನು ನಿಲ್ಲಿಸುವೆ.

## ಸೇವಕರಿಗಾಗಿ ದೇವರ ಔತಣ

6 ಆ ಸಮಯದಲ್ಲಿ, ಸರ್ವಶಕ್ತನಾದ ಯೆಹೋವನು ಎಲ್ಲಾ ಜನರಿಗಾಗಿ ಈ ಪರ್ವತದ ಮೇಲೆ ಔತಣವನ್ನು ಏರ್ಪಡಿಸುವನು. ಅದು ಉತ್ಕೃಷ್ಟವಾದ ದ್ರಾಕ್ಷಾರಸದಿಂದಲೂ ಮೃಷ್ಟಾನದಿಂದಲೂ ಕೂಡಿರುವದು.

7 ಆದರೆ ಎಲ್ಲಾ ಜನಾಂಗಗಳನ್ನು ಮತ್ತು ಜನರನ್ನು ಮುಚ್ಚುವ ಒಂದು ಮುಸುಕು ಇದೆ. ಆ ಮುಸುಕು ಯಾವದೆಂದರೆ ಮರಣ.
8 ಆದರೆ ಮರಣವು ಎಂದೆಂದಿಗೂ ನಾಶಮಾಡಲ್ಪಡುವದು. ನನ್ನ ಒಡೆಯನಾಗಿರುವ ಯೆಹೋವನು ಪ್ರತೀ ಮುಖದಲ್ಲಿರುವ ಕಣ್ಣೀರನ್ನು ಒರೆಸುವನು. ಹಿಂದೆ ಆತನ ಜನರೆಲ್ಲಾ ದುಃಖಕ್ಕೆ ಒಳಗಾಗಿದ್ದರು. ಆದರೆ ದೇವರು ಆ ದುಃಖವನ್ನು ಈ ಭೂಮಿಯಿಂದಲೇ ತೆಗೆದುಹಾಕುವನು. ಇವೆಲ್ಲಾ ಯೆಹೋವನು ಹೇಳಿದಂತೆಯೇ ಸಂಭವಿಸುವದು.

9 ಆ ಸಮಯದಲ್ಲಿ ಜನರು, “ನಮ್ಮ ದೇವರು ಇಲ್ಲಿದ್ದಾನೆ. ಆತನಿಗಾಗಿಯೇ ನಾವು ಕಾಯುತ್ತಿದ್ದದ್ದು. ಆತನು ನಮ್ಮನ್ನು ರಕ್ಷಿಸಲು ಬಂದಿದ್ದಾನೆ. ನಾವು ನಮ್ಮ ದೇವರಾದ ಯೆಹೋವನಿಗಾಗಿ ಕಾಯುತ್ತಿದ್ದೆವು. ಆತನು ನಮ್ಮನ್ನು ರಕ್ಷಿಸುವಾಗ ನಾವು ಹರ್ಷಭರಿತವಾಗಿ ಸಂತೋಷಿಸುವೆವು.”

10 ಯೆಹೋವನ ಬಲವು ಈ ಪರ್ವತದಲ್ಲಿದೆ. ಮೋವಾಬ್ ಸೋಲಿಸಲ್ಪಡುವದು. ಯೆಹೋವನು ವೈರಿಯನ್ನು ಹುಲ್ಲಿನಂತೆ ತುಳಿದುಬಿಡುವನು.

11 ಯೆಹೋವನು ತನ್ನ ಕೈಗಳನ್ನು ಈಜುವವನಂತೆ ಅಗಲವಾಗಿ ತೆರೆದು ಮನುಷ್ಯರು ಹೆಚ್ಚಳಪಡುವ ವಸ್ತುಗಳನ್ನೆಲ್ಲಾ ಬಾಚಿಕೊಳ್ಳುವನು. ಜನರು ತಯಾರಿಸಿದ ಅಂದವಾದ ವಸ್ತುಗಳನ್ನು ಒಟ್ಟುಗೂಡಿಸಿ ಬಿಸಾಡುವನು.

12 ಯೆಹೋವನು ಜನರ ಉನ್ನತವಾದ ಗೋಡೆಗಳನ್ನೂ ಸುರಕ್ಷಿತ ಸ್ಥಳಗಳನ್ನೂ ನಾಶಮಾಡುವನು. ಯೆಹೋವನು ಅವುಗಳನ್ನೆಲ್ಲಾ ನೆಲಸಮ ಮಾಡುವನು.

## ದೇವರಿಗೆ ಸ್ತೋತ್ರ ಗೀತೆ

26 ಆ ಸಮಯದಲ್ಲಿ ಜನರು ಈ ಹಾಡನ್ನು ಯೆಹೂದದಲ್ಲಿ ಹಾಡುವರು.

ಯೆಹೋವನು ನಮಗೆ ರಕ್ಷಣೆಯನ್ನು ಕೊಡುತ್ತಾನೆ. ನಮಗೆ ಬಲವಾದ ಪಟ್ಟಣವಿದೆ. ಅದಕ್ಕೆ ಬಲವಾದ ಗೋಡೆಗಳೂ ಕೋಟೆಗಳೂ ಇವೆ.

2 ದ್ವಾರಗಳನ್ನು ತೆರೆಯಿರಿ. ಒಳ್ಳೆಯ ಜನರು ಅದರಲ್ಲಿ ಪ್ರವೇಶಿಸುವರು. ಅವರು ದೇವರ ನಿಯಮಗಳನ್ನು ಅನುಸರಿಸುತ್ತಾರೆ.

3 ಯೆಹೋವನೇ, ನಿನ್ನಲ್ಲಿ ಭರವಸೆಯಿಟ್ಟವರಿಗೆ ನೀನು ನಿಜವಾದ ಸಮಾಧಾನವನ್ನು ಅನುಗ್ರಹಿಸುವೆ.

4 ಆದುದರಿಂದ ಯೆಹೋವನ ಮೇಲೆ ಯಾವಾ
ಗಲೂ ಭರವಸವಿಡಿರಿ. ಯಾಕೆಂದರೆ ನಿಮಗೆ ದೇವ
ರಾದ ಯೆಹೋವನಲ್ಲಿ ಸುರಕ್ಷತೆಯ ಸ್ಥಳವಿದೆ.
5 ಆದರೆ ಯೆಹೋವನು ಗರ್ವದ ನಗರವನ್ನು ನಾಶ
ಮಾಡುವನು. ಅಲ್ಲಿ ವಾಸಿಸುವವರನ್ನು ಆತನು
ಶಿಕ್ಷಿಸುತ್ತಾನೆ. ಯೆಹೋವನು ಆ ಉನ್ನತವಾದ
ನಗರವನ್ನು ಧೂಳಿಗೆ ಹಾಕಿಬಿಡುವನು.
6 ಆಗ ದೀನರೂ ಬಡಜನರೂ ಆ ಅವಶೇಷಗಳ
ಮೇಲೆ ನಡೆಯುವರು.
7 ಪ್ರಾಮಾಣಿಕತೆಯು ಒಳ್ಳೆಯವರ ಜೀವನ ಶೈಲಿ.
ಅವರು ನೇರವಾದ ಮತ್ತು ಸತ್ಯವಾದ ಮಾರ್ಗವನ್ನು
ಅನುಸರಿಸುವರು. ಯೆಹೋವನೇ, ನೀನು ಆ
ಮಾರ್ಗವನ್ನು ಅನುಸರಿಸಲು ಸುಲಭವಾಗುವಂತೆ
ಮಾಡುವೆ.
8 ಆದರೆ ಯೆಹೋವನೇ, ನಾವು ನಿನ್ನ ನ್ಯಾಯ ವಿಚಾರ
ಣೆಯ ರೀತಿಗಾಗಿ ಕಾಯುತ್ತಿದ್ದೇವೆ. ನಮ್ಮ ಆತ್ಮಗಳು
ನಿನ್ನನ್ನೂ ನಿನ್ನ ನಾಮವನ್ನೂ ನೆನಪು ಮಾಡುತ್ತವೆ.
9 ನನ್ನ ಆತ್ಮವು ನಿನ್ನೊಂದಿಗೆ ರಾತ್ರಿಯಲ್ಲಿರಲು ಆಶಿಸು
ತ್ತದೆ. ನನ್ನೊಳಗಿರುವ ಆತ್ಮವು ನಿನ್ನ ಸಹವಾಸವನ್ನು
ಬಯಸುತ್ತದೆ. ಹೊಸದಿವಸಗಳ ಮುಂಜಾನೆಯಲ್ಲಿ
ನಿನ್ನೊಂದಿಗಿರಲು ಆಶಿಸುತ್ತದೆ. ನಿನ್ನ ನ್ಯಾಯವು ಈ
ಭೂಮಿಗೆ ಬಂದಾಗ ಜನರು ಜೀವನದ ಸತ್ಯ
ಮಾರ್ಗವನ್ನು ಅರಿಯುವರು.
10 ದುಷ್ಟನಿಗೆ ದಯೆತೋರಿಸಿದರೆ ಅವನು ಸುಕಾರ್ಯ
ಗಳನ್ನು ಮಾಡಲು ಕಲಿಯುವುದಿಲ್ಲ. ಒಬ್ಬ ದುಷ್ಟನು
ಯಥಾರ್ಥರ ಲೋಕದಲ್ಲಿ ಜೀವಿಸಿದರೂ ಅವನು
ದುಷ್ಟಕಾರ್ಯಗಳನ್ನೇ ಮಾಡುವನು. ಆ ದುಷ್ಟನು
ಯೆಹೋವನ ಮಹತ್ವವನ್ನು ಎಂದೂ ಗಮನಿಸ
ಲಾರನು.
11 ಆದರೆ ದೇವರೇ, ನೀನು ಅವರನ್ನು ಶಿಕ್ಷಿಸಿದರೆ
ಅವರು ಅದನ್ನು ನೋಡುವರು. ನಿನ್ನ ಜನರ ಮೇಲೆ
ನಿನಗಿರುವ ಗಾಢಪ್ರೀತಿಯನ್ನು ಆ ದುಷ್ಟಜನರು
ನೋಡಲಿ. ಆಗ ಅವರು ಅವಮಾನ ಹೊಂದು
ವರು. ನಿನ್ನ ಶತ್ರುಗಳು ತಮ್ಮ ದುಷ್ಟತನದ ಬೆಂಕಿ
ಯಲ್ಲಿಯೇ ಸುಟ್ಟುಹೋಗುವರು.
12 ಯೆಹೋವನೇ, ನೀನು ಮಾಡಬಯಸಿದ ಎಲ್ಲವು
ಗಳಲ್ಲಿ ಯಶಸ್ವಿಯಾಗಿರುವೆ. ಆದುದರಿಂದ ನಮಗೆ
ಶಾಂತಿಯನ್ನು ಅನುಗ್ರಹಿಸು.

### ದೇವರು ತನ್ನ ಜನರಿಗೆ ಹೊಸ ಜೀವವನ್ನು ಕೊಡುವನು

13 ಯೆಹೋವನೇ, ನೀನೇ ನಮ್ಮ ದೇವರು. ಆದರೆ
ಹಿಂದಿನ ಕಾಲದಲ್ಲಿ ನಾವು ಇತರ ಪ್ರಭುಗಳನ್ನು
ಅನುಸರಿಸಿದೆವು. ನಾವು ನಮ್ಮ ಒಡೆಯರುಗಳಿಗೆ,
ಸೇರಿದ್ದೆವು. ಆದರೆ ಈಗ ಜನರು ಒಂದೇ ಹೆಸರನ್ನು,
ಅಂದರೆ ನಿನ್ನ ಹೆಸರನ್ನೇ ನೆನಪುಮಾಡಲಿ.
14 ಇತರ ದೇವರುಗಳಿಗೆ ಜೀವವಿಲ್ಲ. ಪ್ರೇತಗಳು ಸತ್ತವ
ರೊಳಗಿಂದ ಏಳುವದಿಲ್ಲ. ನೀನು ಅವುಗಳನ್ನು
ನಾಶಮಾಡಲು ತೀರ್ಮಾನಿಸಿದೆ. ಅದರ ಬಗ್ಗೆ
ನಮಗೆ ನೆನಪು ಹುಟ್ಟಿಸುವ ಎಲ್ಲಾ ವಿಚಾರಗಳನ್ನು
ನೀನು ನಾಶಮಾಡಿದೆ.
15 ನೀನು ಪ್ರೀತಿಸುವ ಜನಾಂಗಕ್ಕೆ ನೀನು ಸಹಾಯ
ಮಾಡಿದೆ. ಬೇರೆ ಜನಾಂಗದವರು ಅವರನ್ನು
ಸೋಲಿಸದಂತೆ ಮಾಡಿದೆ.
16 ಯೆಹೋವನೇ, ಕಷ್ಟ ಬಂದಾಗ ಜನರಿಗೆ ನಿನ್ನ
ನೆನಪಾಗುವುದು. ನೀನು ಅವರನ್ನು ಶಿಕ್ಷಿಸಿದಾಗ
ಅವರು ನಿನಗೆ ಮೌನ ಪ್ರಾರ್ಥನೆ ಮಾಡುವರು.
17 ಯೆಹೋವನೇ, ನಾವು ನಿನ್ನೊಂದಿಗೆ ಇಲ್ಲದಿದ್ದಾಗ
ಪ್ರಸವವೇದನೆಯಿಂದ ನರಳುವ ಸ್ತ್ರೀಯಂತೆ ನಾವು
ಇರುವೆವು.
18 ಅದೇ ರೀತಿಯಲ್ಲಿ ನಾವು ನೋವನ್ನು ಅನುಭವಿಸು
ತ್ತೇವೆ. ನಾವು ಹೆರುವದು ಕೇವಲ ಗಾಳಿಯನ್ನೇ.
ನಾವು ಈ ಲೋಕದೊಳಗೆ ಹೊಸಜೀವಿಗಳನ್ನು
ನಿರ್ಮಿಸುವದಿಲ್ಲ. ನಾವು ದೇಶಕ್ಕೆ ರಕ್ಷಣೆಯನ್ನು
ತರುವದಿಲ್ಲ.
19 ಆದರೆ ಯೆಹೋವನು ಹೇಳುವದೇನೆಂದರೆ, ನಿನ್ನ
ಜನರು ಸತ್ತಿದ್ದಾರೆ. ಆದರೆ ಅವರು ಮತ್ತೆ ಬದುಕು
ವರು. ನನ್ನ ಜನರ ದೇಹಗಳು ಸತ್ತವರೊಳಗಿಂದ
ಏಳುವವು. ಭೂಮಿಯ ಮೇಲೆ ಸತ್ತಿರುವ ಜನರೇ,
ಎದ್ದುನಿಂತು ಸಂತೋಷಿಸಿರಿ. ನಿಮ್ಮನ್ನು ಆವರಿಸಿದ
ಮಂಜು ಮುಂಜಾನೆಯ ಬೆಳಕಿನಂತೆ ಪ್ರಕಾಶಿಸು
ತ್ತದೆ. ಭೂಮಿಯು ತನ್ನಲ್ಲಿರುವ ಸತ್ತವರನ್ನು ಒಪ್ಪಿಸಿ
ಕೊಡುವಾಗ ಪ್ರಾರಂಭವಾಗುವ ಹೊಸದಿನವನ್ನು
ಅದು ಸೂಚಿಸುವದು.''

### ಶಿಕ್ಷೆ ಅಥವಾ ಬಹುಮಾನ

20 ನನ್ನ ಜನರೇ, ನಿಮ್ಮ ನಿಮ್ಮ ಕೋಣೆಯೊಳಗೆ
ಹೋಗಿ ಕದಮುಚ್ಚಿರಿ. ಸ್ವಲ್ಪಕಾಲ ನೀವು ಅಲ್ಲಿಯೇ
ಅಡಗಿಕೊಳ್ಳಿರಿ. ದೇವರ ಕೋಪ ತೀರುವ ತನಕ
ಅಲ್ಲಿಯೇ ಅವಿತುಕೊಳ್ಳಿರಿ.
21 ಈ ಲೋಕದ ಜನರು ನಡಿಸಿದ ಪಾಪಕೃತ್ಯಗಳಿಗೆ
ನ್ಯಾಯ ತೀರಿಸಲು ಯೆಹೋವನು ತನ್ನ ಸ್ಥಳದಿಂದ
ಎದ್ದಿದ್ದಾನೆ. ಭೂಮಿಯು ತನ್ನಲ್ಲಿರುವ ರಕ್ತವನ್ನು

ತೋರಿಸುವದು. ಭೂಮಿಯು ಇನ್ನುಮುಂದೆ ಸತ್ತ
ವರನ್ನು ಮುಚ್ಚುವದಿಲ್ಲ.

27 ಆ ಸಮಯದಲ್ಲಿ ಯೆಹೋವನು ವಂಚನೆಯ
ಸರ್ಪವಾದ ಲಿವ್ಯಾತಾನನಿಗೆ ನ್ಯಾಯ ತೀರಿಸು
ವನು. ಯೆಹೋವನು ಕಠಿಣವೂ, ಮಹತ್ವವೂ,
ಬಲವೂ ಆಗಿರುವ ತನ್ನ ಖಡ್ಗದಿಂದ ಸುತ್ತಿಕೊಂಡಿ
ರುವ ಸರ್ಪವಾದ ಲಿವ್ಯಾತಾನನನ್ನು ಕೊಲ್ಲುವನು.
ಯೆಹೋವನು ಸಮುದ್ರದಲ್ಲಿರುವ ಮಹಾಜೀವಿ
ಯನ್ನು ಕೊಲ್ಲುವನು.

2 ಆ ಸಮಯದಲ್ಲಿ ಜನರು ಮನೋಹರವಾದ ದ್ರಾಕ್ಷಿ
ತೋಟದ ವಿಷಯವಾಗಿ ಹಾಡುವರು.

3 “ಯೆಹೋವನಾದ ನಾನು ಆ ತೋಟವನ್ನು ಚೆನ್ನಾಗಿ
ನೋಡಿಕೊಳ್ಳುವೆನು. ಸರಿಯಾದ ಕಾಲದಲ್ಲಿ
ತೋಟಕ್ಕೆ ನೀರು ಹೊಯ್ಯುವೆನು. ರಾತ್ರಿ ಹಗಲು
ತೋಟವನ್ನು ಕಾಯುವೆನು. ಆ ತೋಟವನ್ನು
ಯಾರೂ ಹಾಳುಮಾಡುವದಿಲ್ಲ.

4 ನಾನು ಕೋಪಗೊಂಡಿಲ್ಲ. ಆದರೆ ಯುದ್ಧ ನಡೆ
ಯುತ್ತಿರುವಾಗ ಯಾರಾದರೂ ಮುಳ್ಳುಬೇಲಿ
ಯನ್ನು ಹಾಕಿದರೆ, ನಾನು ಮುನ್ನುಗ್ಗಿ ಅದನ್ನು
ಸುಟ್ಟುಹಾಕುವೆನು.

5 ಆದರೆ ಯಾವನಾದರೂ ಆಶ್ರಯಕ್ಕಾಗಿ ನನ್ನ ಬಳಿಗೆ
ಬಂದು ನನ್ನೊಡನೆ ಸಮಾಧಾನ ಮಾಡಿಕೊಳ್ಳುವು
ದಾದರೆ ಅವನು ನನ್ನ ಬಳಿಗೆ ಬಂದು ಸಮಾಧಾನ
ದಲ್ಲಿರಲಿ.

6 ಜನರು ನನ್ನ ಬಳಿಗೆ ಬರುವರು. ಆ ಜನರು
ಯಾಕೋಬನನ್ನು ಆಳವಾದ ಬೇರುಳ್ಳ ಗಿಡದಂತೆ
ಬಲಶಾಲಿಯನ್ನಾಗಿ ಮಾಡುವರು. ಬೆಳೆದು ಹೂಬಿ
ಡುವ ಗಿಡದಂತೆ ಅವರು ಇಸ್ರೇಲಿಗೆ ಮಾಡುವರು.
ಹಣ್ಣುಗಳಂತೆ ಇಸ್ರೇಲರ ಮಕ್ಕಳು ಭೂಮಿಯ
ಮೇಲೆ ತುಂಬಿಹೋಗುವರು.”

### ದೇವರು ಇಸ್ರೇಲರನ್ನು ಕಳುಹಿಸಿ ಬಿಡುವನು

7 ಯೆಹೋವನು ತನ್ನ ಜನರನ್ನು ಹೇಗೆ ಶಿಕ್ಷಿಸುವನು?
ಹಿಂದಿನ ಕಾಲದಲ್ಲಿ ಶತ್ರುಗಳು ಜನರನ್ನು ಗಾಯ ಪಡಿಸಿ
ದರು. ಯೆಹೋವನೂ ಹಾಗೆ ಮಾಡುವನೇ? ಹಿಂದಿನ
ಕಾಲದಲ್ಲಿ ಅನೇಕ ಮಂದಿ ಕೊಲ್ಲಲ್ಪಟ್ಟರು. ಹಾಗೆಯೇ
ಯೆಹೋವನು ಜನರನ್ನು ಕೊಲ್ಲುವನೇ?.

8 ಯೆಹೋವನು ತನ್ನ ಜನರನ್ನು ದೂರ ದೇಶಕ್ಕೆ ಕಳು
ಹಿಸುವದರ ಮೂಲಕ ಅವರನ್ನು ಶಿಕ್ಷಿಸುವನು. ಇಸ್ರೇಲ
ರೊಂದಿಗೆ ಯೆಹೋವನು ಕಟುವಾಗಿ ಮಾತನಾಡುವನು.
ಆತನ ಮಾತುಗಳು ಮರುಭೂಮಿಯ ಬಿಸಿಗಾಳಿಯಂತೆ
ಸುಡುವವು.

9 ಯಾಕೋಬನ ದೋಷವು ಹೇಗೆ ಕ್ಷಮಿಸಲ್ಪಡು
ವದು? ಅವನ ಪಾಪಗಳು ನಿವಾರಣೆಯಾಗುವದಕ್ಕೆ ಏನು
ಮಾಡಬೇಕಾಗುವದು? ಈ ಸಂಗತಿಗಳು ಸಂಭವಿಸು
ವವು. ಇತರ ದೇವತೆಗಳ ಪೂಜಾಸ್ಥಳಗಳೂ ವೇದಿಕೆಯ
ಕಲ್ಲುಗಳೂ ಪುಡಿಪುಡಿಯಾಗಿ ನಾಶವಾಗುವವು.

10 ಆ ಸಮಯದಲ್ಲಿ ಆ ಮಹಾನಗರವು ನಿರ್ಜನವಾಗಿರು
ವದು. ಅದು ಮರುಭೂಮಿಯಂತಿರುವದು. ಜನರೆ
ಲ್ಲರೂ ಹೊರಟು ಹೋಗಿರುವರು. ಅವರು ಪಲಾಯ
ನಗೈದಿದ್ದಾರೆ. ನಗರವು ತೆರೆದ ಹುಲ್ಲುಗಾವಲಿನಂತಿರು
ವುದು. ಪಶುಗಳು ಅಲ್ಲಿ ಹುಲ್ಲನ್ನು ಮೇಯುತ್ತವೆ. ದನ
ಗಳು ದ್ರಾಕ್ಷಾಲತೆಯ ಚಿಗುರೆಲೆಗಳನ್ನು ತಿನ್ನುವವು.
11 ದ್ರಾಕ್ಷಾಬಳ್ಳಿ ಒಣಗಿಹೋಗುವವು. ಅದರ ಕೊಂಬೆ
ಗಳು ಮುರಿದುಬೀಳುವವು. ಹೆಂಗಸರು ಆ ಕೊಂಬೆಗ
ಳನ್ನು ಸೌದೆಯಾಗಿ ಉಪಯೋಗಿಸುವರು.

ಜನರು ತಿಳಿದುಕೊಳ್ಳುವದಕ್ಕೆ ಮನಸ್ಸು ಕೊಡುವದಿಲ್ಲ.
ಆದುದರಿಂದ ಅವರ ನಿರ್ಮಾಣಿಕನಾದ ದೇವರು ಅವ
ರನ್ನು ಸಂತೈಸುವದಿಲ್ಲ. ಅವರ ನಿರ್ಮಾಣಿಕನು ಅವರಿಗೆ
ದಯೆ ತೋರುವದಿಲ್ಲ.

12 ಆ ಸಮಯದಲ್ಲಿ, ಯೆಹೋವನು ತನ್ನ ಜನರನ್ನು
ಬೇರೆಯವರಿಂದ ಬೇರ್ಪಡಿಸುವನು. ಆತನು ಯೂಫ್ರೇ
ಟೀಸ್ ನದಿಯಿಂದ ಪ್ರಾರಂಭಿಸಿ ಈಜಿಪ್ಟಿನ ನದಿಯವ
ರೆಗಿನ ತನಕ ಎಲ್ಲಾ ಜನರನ್ನು ಒಟ್ಟುಗೂಡಿಸುವನು.

ಇಸ್ರೇಲ್ ಜನರೇ, ನೀವು ಒಬ್ಬೊಬ್ಬರಾಗಿಯೇ ಒಟ್ಟು
ಗೂಡಿಸಲ್ಪಡುವಿರಿ.
13 ನನ್ನ ಜನರಲ್ಲಿ ಹೆಚ್ಚಿನವರು
ಅಶ್ಶೂರದಲ್ಲಿ ಈಗ ಕಳೆದು ಹೋಗಿರುತ್ತಾರೆ; ಕೆಲವರು
ಈಜಿಪ್ಟಿಗೆ ಓಡಿಹೋಗಿದ್ದಾರೆ. ಆ ಸಮಯದಲ್ಲಿ ಮಹಾ
ದೊಡ್ಡ ತುತೂರಿಯ ಶಬ್ದವು ಕೇಳಿಸುವದು. ಆಗ ಆ
ಜನರೆಲ್ಲರೂ ಜೆರುಸಲೇಮಿಗೆ ಹಿಂತಿರುಗುವರು. ಆ
ಜನರು ಪರಿಶುದ್ಧ ಪರ್ವತದ ಮೇಲೆ ಯೆಹೋವನ
ಮುಂದೆ ಅಡ್ಡಬೀಳುವರು.

### ಉತ್ತರ ಇಸ್ರೇಲಿಗೆ ಎಚ್ಚರಿಕೆ

28 ಸಮಾರ್ಯದ ಕಡೆಗೆ ನೋಡು. ಎಫ್ರಾಯೀ
ಮಿನ ಮತ್ತರಾದ ಜನರು ಆ ಪಟ್ಟಣದ ಬಗ್ಗೆ
ಬಹಳ ಅಭಿಮಾನಪಡುತ್ತಿದ್ದಾರೆ. ಆ ನಗರವು
ಪರ್ವತದ ಮೇಲಿರುವುದು; ಅದರ ಸುತ್ತಲೂ ಫಲ
ವತ್ತಾದ ಕಣಿವೆ ಇರುವದು. ಸಮಾರ್ಯದ ಜನರು
ತಮ್ಮ ನಗರವು “ಸುಂದರವಾದ ಕಿರೀಟ” ವೆಂದು
ನೆನಸುತ್ತಾರೆ. ಆದರೆ ಅವರು ಕುಡಿದು ಮತ್ತರಾಗಿ
ದ್ದಾರೆ. ಅವರ ಸುಂದರ ಕಿರೀಟವು ಒಣಗಿದ ತರಗೆಲೆ
ಯಾಗಿದೆ.

[2] ಇಗೋ, ನನ್ನ ಒಡೆಯನಿಗೆ ಬಲಿಷ್ಠನೂ ಧೈರ್ಯ
ವಂತನೂ ಆಗಿರುವ ಒಬ್ಬನಿದ್ದಾನೆ. ಅವನು ದೇಶ
ದೊಳಗೆ ಆಲಿಕಲ್ಲಿನ ಮಳೆಯಿಂದ ಕೂಡಿದ ಬಿರು
ಗಾಳಿಯಂತೆಯೂ ನದಿಯ ಬಲವಾದ ಪ್ರವಾಹವು
ದೇಶದೊಳಗೆ ನುಗ್ಗಿ ಬರುವಂತೆಯೂ ಅವನು
ಬರುವನು. ಆ ಕಿರೀಟವನ್ನು (ಸಮಾರ್ಯ) ನೆಲದ
ಮೇಲೆ ಬಿಸಾಡುವನು.

[3] ಕುಡಿದು ಮತ್ತರಾದ ಎಫ್ರಾಯೀಮ್ಯರಿಗೆ ಸುಂದರ
ವಾದ ಕಿರೀಟದ ಮೇಲೆ ಬಹಳ ಹೆಚ್ಚಳ. ಆದರೆ ಆ
ನಗರವು ತುಳಿಯಲ್ಪಡುವದು.

[4] ಆ ನಗರವು ಬೆಟ್ಟದ ಮೇಲೆ ಕುಳಿತಿದೆ; ಸುತ್ತಲೂ
ಫಲ ವತ್ತಾದ ಕಣಿವೆ ಇದೆ. ಆ ಸುಂದರವಾದ ಪುಷ್ಪ
ಕಿರೀಟವು ಕೇವಲ ಒಣಗಿದ ತರಗೆಲೆ. ಆ ನಗರವು
ಬೇಸಿಗೆಯ. ಮೊದಲಿನ (ಅಂಜೂರದ) ಹಣ್ಣುಗ
ಳಂತೆ ಇವೆ. ಅದನ್ನು ನೋಡಿದವರು ಕೂಡಲೇ
ತೆಗೆದುಕೊಂಡು ಬಾಯಿಗೆ ಹಾಕಿಕೊಳ್ಳುವರು.

[5] ಆ ಸಮಯದಲ್ಲಿ ಸರ್ವಶಕ್ತನಾದ ದೇವರು ಮಹಿಮಾ
ಪೂರ್ಣವಾದ ಕಿರೀಟವಾಗುವನು. ಉಳಿದಿರುವ ಅವನ
ಜನರಿಗೆ ಆತನು ಅಂದವಾದ ಪುಷ್ಪ ಕಿರೀಟವಾಗಿರುವನು.
[6] ಆತನ ಜನರನ್ನು ಆಳುವ ನ್ಯಾಯಾಧಿಪತಿಗಳಿಗೆ ಯೆಹೋ
ವನು ಜ್ಞಾನವನ್ನು ಕೊಡುವನು. ಪುರದ್ವಾರದಲ್ಲಿ ಯುದ್ಧ
ಮಾಡುವ ಆತನ ಜನರಿಗೆ ಯೆಹೋವನು ಬಲವನ್ನು
ಕೊಡುವನು.
[7] ಆದರೆ ಈಗ ಆ ನಾಯಕರುಗಳು ಮತ್ತರಾಗಿದ್ದಾರೆ.
ಯಾಜಕರೂ ಪ್ರವಾದಿಗಳೂ ಮದ್ಯ ಸೇವನೆಯಿಂದ ಮತ್ತ
ರಾಗಿದ್ದಾರೆ. ಅವರು ಎಡವಿ ಬೀಳುತ್ತಾರೆ. ಪ್ರವಾದಿಗಳು
ದರ್ಶನಗಳನ್ನು ಕಾಣುವಾಗ ಅಮಲೇರಿದವರಾಗಿರು
ತ್ತಾರೆ; ನ್ಯಾಯಧೀಶರು ತೀರ್ಪು ಕೊಡುವಾಗ ಅಮಲೇರಿ
ದವರಾಗಿರುತ್ತಾರೆ. [8] ಅವರ ಮುಂದಿರುವ ಮೇಜುಗಳ
ಮೇಲೆ ವಾಂತಿಯು ತುಂಬಿರುತ್ತದೆ; ಶುದ್ಧವಾದ ಸ್ಥಳವೇ
ಇರುವದಿಲ್ಲ.

## ದೇವರು ತನ್ನ ಜನರಿಗೆ ಸಹಾಯ ಮಾಡುವನು

[9] ಯೆಹೋವನು ಜನರಿಗೆ ಪಾಠ ಕಲಿಸಲು ಪ್ರಯತ್ನಿಸು
ತ್ತಿದ್ದಾನೆ. ತನ್ನ ಬೋಧನೆಯನ್ನು ತನ್ನ ಜನರು ಅರಿತು
ಕೊಳ್ಳಲೆಂದು ಯೆಹೋವನು ಪ್ರಯತ್ನಿಸುತ್ತಿದ್ದಾನೆ. ಸ್ವಲ್ಪ
ಸಮಯದ ಮೊದಲೇ ತಮ್ಮ ತಾಯಂದಿರ ಸ್ತನಗಳ ಬಳಿ
ಇದ್ದ ಕೂಸುಗಳಂತೆ ಅವರಿರುವರು. [10] ಆದುದರಿಂದ ಸಣ್ಣ
ಶಿಶುಗಳಿಗೆಂಬಂತೆ ಯೆಹೋವನು ಅವರ ಸಂಗಡ
ಮಾತನಾಡುತ್ತಾನೆ:

ಸಾ ಲಸಾವ್ ಸಾ ಲಸಾವ್ ಖಾವ್ ಲಖಾವ್
ಖಾವ್ ಲಖಾವ್ ಜೆಯಿರ್ ಶಾಮ್ ಜೆಯಿರ್
ಶಾಮ್.

[11] ಅವರ ಸಂಗಡ ವಿಚಿತ್ರವಾಗಿಯೂ ಅನ್ಯಭಾಷೆಗ
ಳಲ್ಲಿಯೂ ಮಾತಾನಾಡುತ್ತಾನೆ.
[12] ಹಿಂದಿನ ಕಾಲದಲ್ಲಿ ದೇವರು ಅವರ ಸಂಗಡ ಮಾತ
ನಾಡಿ, ''ಇಲ್ಲಿ ವಿಶ್ರಾಂತಿಯ ಸ್ಥಳವಿದೆ, ಇದು ವಿಶ್ರಮಿಸುವ
ಸ್ಥಳ. ಆಯಾಸಗೊಂಡವರೇ, ಬಂದು ವಿಶ್ರಮಿಸಿರಿ. ಇದು
ಸಮಾಧಾನಕರವಾದ ಸ್ಥಳ'' ಎಂದು ಹೇಳುತ್ತಿದ್ದನು.
ಆದರೆ ಜನರಿಗೆ ಆತನ ಮಾತುಗಳನ್ನು ಕೇಳಲು ಇಷ್ಟ
ವಾಗಲಿಲ್ಲ. [13] ಆದುದರಿಂದ ಆತನ ಮಾತು ಅವರಿಗೆ ಪರ
ಭಾಷೆಯಂತೆ ಕೇಳಿಸುವುದು.

ಸಾ ಲಸಾವ್ ಸಾ ಲಸಾವ್ ಖಾವ್ ಲಖಾವ್
ಖಾವ್ ಲಖಾವ್ ಜೆಯಿರ್ ಶಾಮ್ ಜೆಯಿರ್
ಶಾಮ್*

ಜನರು ತಮ್ಮ ಇಷ್ಟ ಪ್ರಕಾರ ನಡೆದರು. ಆದುದರಿಂದ
ಅವರು ಸೋಲಿಸಲ್ಪಟ್ಟರು. ಅವರು ಉರುಲಿಗೆ ಸಿಕ್ಕಿ ಹಾಕಿ
ಕೊಂಡು ಹಿಡಿಯಲ್ಪಟ್ಟರು.

## ದೇವರ ನ್ಯಾಯತೀರ್ಪಿನಿಂದ ಯಾರೂ ತಪ್ಪಿಸಿಕೊಳ್ಳುವದಿಲ್ಲ

[14] ಜೆರುಸಲೇಮಿನಲ್ಲಿರುವ ಅಧಿಪತಿಗಳೇ, ಯೆಹೋ
ವನ ಸಂದೇಶವನ್ನು ನೀವು ಕೇಳಬೇಕು. ಆದರೆ ನೀವು
ಅದನ್ನು ಕೇಳಲು ನಿರಾಕರಿಸುತ್ತಿದ್ದೀರಿ. [15] ನೀವು, ''ನಾವು
ಮರಣದೊಂದಿಗೆ ಒಪ್ಪಂದ ಮಾಡಿಕೊಂಡಿದ್ದೇವೆ. ನಾವು
ನರಕದೊಂದಿಗೆ ಒಪ್ಪಂದ ಮಾಡಿದ್ದೇವೆ. ಆದುದರಿಂದ
ನಾವು ಶಿಕ್ಷಿಸಲ್ಪಡುವದಿಲ್ಲ. ಶಿಕ್ಷೆಯು ಹಾದುಹೋಗು
ವಾಗ ಅದು ನಮಗೇನೂ ಹಾನಿ ಮಾಡುವದಿಲ್ಲ. ನಾವು
ನಮ್ಮ ಸುಳ್ಳು ಮೋಸಗಳ ಹಿಂದೆ ಅವಿತುಕೊಳ್ಳುತ್ತೇವೆ''
ಎಂದು ಹೇಳುತ್ತೀರಿ.
[16] ಇದಕ್ಕೋಸ್ಕರವಾಗಿಯೇ, ನನ್ನ ಒಡೆಯನಾದ
ಯೆಹೋವನು ಇಂತೆನ್ನುವನು: ''ಚೀಯೋನಿನಲ್ಲಿ ನಾನು
ಒಂದು ಮೂಲೆಗಲ್ಲು ಇಡುವೆನು. ಇದು ಬಹು ಅಮೂಲ್ಯ
ವಾದ ಕಲ್ಲು. ಈ ವಿಶೇಷವಾದ ಕಲ್ಲಿನ ಮೇಲೆ ಎಲ್ಲವೂ
ಕಟ್ಟಲ್ಪಡುವದು. ಯಾವನಾದರೂ ಆ ಕಲ್ಲಿನ ಮೇಲೆ
ಭರವಸವಿಡುವವನು ಆಶಾಭಂಗಪಡುವದಿಲ್ಲ.

---

**ಸಾ … ಶಾಮ್** ಬಹುಶಃ ಚಿಕ್ಕಮಕ್ಕಳಿಗೆ ಬರೆಯುವದನ್ನು ಕಲಿಸುವಾಗ ಬಳಸುವ ಹೀಬ್ರೂ ಹಾಡು. ಇದರರ್ಥ, ''ಇಲ್ಲಿಯೊಂದು ಆಜ್ಞೆ, ಅಲ್ಲಿಯೊಂದು ಆಜ್ಞೆ. ಇಲ್ಲಿಯೊಂದು ನಿಯಮ, ಅಲ್ಲಿಯೊಂದು ನಿಯಮ. ಇಲ್ಲಿಯೊಂದು ಪಾಠ ಅಲ್ಲಿಯೊಂದು ಪಾಠ.''

[17]‘‘ಗೋಡೆಯು ನೆಟ್ಟಗಿದೆಯೆಂದು ನೋಡಲು
ಜನರು ಗುಂಡನ್ನೂ ನೂಲನ್ನೂ ಉಪಯೋಗಿಸುತ್ತಾರೆ.
ಅದೇ ರೀತಿಯಲ್ಲಿ ನಾನು ಯಾವದು ಸತ್ಯ ಯಾವದು
ನ್ಯಾಯ ಎಂದು ತೋರಿಸುವದಕ್ಕೆ ನ್ಯಾಯ ಮತ್ತು ಕರುಣೆ
ಗಳನ್ನು ಉಪಯೋಗಿಸುವೆನು.

‘‘ನೀವು ದುಷ್ಟಜನರು. ನೀವು ನಿಮ್ಮ ಸುಳ್ಳುಮೋಸಗಳ
ಹಿಂದೆ ಅವಿತುಕೊಳ್ಳುತ್ತಿದ್ದೀರಿ. ಆದರೆ ನೀವು ಶಿಕ್ಷಿಸಲ್ಪ
ಡುವಿರಿ. ನೀವು ಅಡಗಿಕೊಂಡಿರುವ ಸ್ಥಳವನ್ನು ನಾಶ
ಮಾಡುವ ಬಿರುಗಾಳಿಯಂತೆಯೂ ಪ್ರವಾಹದಂತೆಯೂ
ಅದಿರುವುದು. [18]ಮರಣದೊಂದಿಗೆ ನೀವು ಮಾಡಿದ
ಒಪ್ಪಂದವು ಮುರಿಯಲ್ಪಡುವದು. ನರಕದೊಂದಿಗೆ
ನೀವು ಮಾಡಿದ ಒಪ್ಪಂದವು ನಿಮ್ಮ ಸಹಾಯಕ್ಕೆ
ಬಾರದು.

‘‘ನಿಮ್ಮನ್ನು ಶಿಕ್ಷಿಸಲು ಒಬ್ಬನು ಬರುವನು. ಆತನು
ನೀವು ಧೂಳೋ ಎಂಬಂತೆ ನಿಮ್ಮ ಮೇಲೆ ತುಳಿದಾಡು
ವನು. [19]ಆತನು ಬಂದು ನಿಮ್ಮನ್ನು ತೆಗೆದುಕೊಂಡು
ಹೋಗುವನು. ನಿಮಗೆ ದೊರಕುವ ಶಿಕ್ಷೆ ಬಹು
ಭಯಂಕರವಾದದ್ದು. ಅದರ ಬಗ್ಗೆ ನೀವು ಕೇಳಿದ
ಕೂಡಲೇ ಚಿಂತಿಸಲಾರಂಭಿಸುವಿರಿ. ಅದು ಮುಂಜಾನೆ
ಬಂದು ರಾತ್ರಿ ಬಹು ಹೊತ್ತಿನ ತನಕ ಇರುವದು.

[20]‘‘ಆಗ ನೀವು ಈ ಕಥೆಯನ್ನು ಅರ್ಥಮಾಡಿಕೊಳ್ಳು
ವಿರಿ: ಒಬ್ಬ ಮನುಷ್ಯನು ತನಗೆ ಚಿಕ್ಕದಾಗಿರುವ ಹಾಸಿಗೆಯ
ಮೇಲೆ ಮಲಗಲು ಪ್ರಯತ್ನಿಸುವನು. ಅವನಲ್ಲಿರುವ
ಕಂಬಳಿಯು ಅವನನ್ನು ಪೂರ್ಣವಾಗಿ ಮುಚ್ಚುತ್ತಿರಲಿಲ್ಲ.
ಆ ಹಾಸಿಗೆಯೂ, ಆ ಕಂಬಳಿಯೂ ಹೇಗೆ ನಿಷ್ಪ್ರಯೋಜ
ಕವೋ ಹಾಗೆಯೇ ನಿಮ್ಮ ಒಪ್ಪಂದವೂ ನಿಷ್ಪ್ರಯೋಜಕ
ವಾಗಿದೆ.’’

[21]ಪೆರಾಚೀಮ್ ಬೆಟ್ಟದ ಮೇಲೆ ಯೆಹೋವನು
ಯುದ್ಧಮಾಡಿದಂತೆಯೇ ಆತನು ಯುದ್ಧಮಾಡುವನು.
ಗಿಬ್ಯೋನ್ ಕಣಿವೆಯಲ್ಲಿ ಯೆಹೋವನು ಕೋಪ
ಗೊಂಡಿದ್ದಂತೆಯೇ ಕೋಪಗೊಳ್ಳುವನು. ಆಗ ಆತನು
ಮಾಡಬೇಕಾದ ಕಾರ್ಯಗಳನ್ನು ಮಾಡುವನು.
ಯೆಹೋವನು ಕೆಲವು ಅಪರಿಚಿತವಾದ ಸಂಗತಿಗಳನ್ನು
ಮಾಡುವನು. ಆದರೆ ಆತನು ತನ್ನ ಕಾರ್ಯವನ್ನು ಮಾಡಿ
ಮುಗಿಸುವನು. ಆ ಕೆಲಸವು ಒಬ್ಬ ಪರಿಚಯವಿಲ್ಲದವನ
ಕೆಲಸವಾಗಿದೆ. [22]ಈಗ ನೀವು ಆ ವಿಷಯಗಳೊಂದಿಗೆ
ಯುದ್ಧಮಾಡಬಾರದು. ನೀವು ಹಾಗೆ ಮಾಡಿದ್ದಲ್ಲಿ ನಿಮ್ಮ
ಸುತ್ತಲಿರುವ ಹಗ್ಗವು ಇನ್ನೂ ಬಿಗಿಯಾಗುವದು.

ನಾನು ಕೇಳಿರುವ ಮಾತುಗಳು ಬದಲಾಗವು.
ಯಾಕೆಂದರೆ ಅವು ಸರ್ವಶಕ್ತನಾದ ಯೆಹೋವನ ಮಾತು
ಗಳು. ಆತನು ಪ್ರಪಂಚವನ್ನು ಆಳುವಾತನು. ಆ ಸಂಗತಿ
ಗಳೆಲ್ಲವೂ ಸಂಭವಿಸುವವು.

## ಯೆಹೋವನ ಶಿಕ್ಷೆಯು ನ್ಯಾಯಸಮ್ಮತವಾದದ್ದು

[23]ನಾನು ಹೇಳುವ ಸಂದೇಶಕ್ಕೆ ಜಾಗ್ರತೆಯಿಂದ ಕಿವಿ
ಗೊಡಿರಿ. [24]ಒಬ್ಬ ವ್ಯವಸಾಯಗಾರನು ಯಾವಾಗಲೂ
ಉಳುತ್ತಲೇ ಇರುವನೋ? ಇಲ್ಲ. ಅವನು ಮಣ್ಣಿನಲ್ಲಿ
ಯಾವಾಗಲೂ ಕೆಲಸಮಾಡುತ್ತಿರುವನೋ? ಇಲ್ಲ.
[25]ವ್ಯವಸಾಯಗಾರನು ಮಣ್ಣನ್ನು ಹಸನುಮಾಡಿ ನಂತರ
ಬೀಜ ಬಿತ್ತುವನು. ಬೇರೆಬೇರೆ ತರದ ಬೀಜಗಳನ್ನು ಬೇರೆ
ಬೇರೆ ರೀತಿಯಲ್ಲಿ ಬಿತ್ತುವನು. ಅವನು ಗೋಧಿಯ
ನ್ನಾಗಲೀ ಬಾರ್ಲಿಯನ್ನಾಗಲೀ ನೆಲದ ಮೇಲೆ ಬಿಸಾಡು
ವನು. ಗೋಧಿಯನ್ನು ಸಾಲಾಗಿ ಬಿತ್ತುವನು. ಬೇರೆಬೇರೆ
ಗಿಡಗಳ ಬೀಜವನ್ನು ಬೇರೆಬೇರೆ ಸ್ಥಳಗಳಲ್ಲಿಯೂ ಬೇರೆ
ಬೇರೆ ವಿಧಾನದಲ್ಲಿಯೂ ಬಿತ್ತುವನು.

[26]ನಮ್ಮ ದೇವರು ಈ ಉದಾಹರಣೆಯ ಮೂಲಕ
ಒಂದು ಪಾಠವನ್ನು ಕಲಿಸುತ್ತಾನೆ. ಏನೆಂದರೆ ಆತನು ಜನ
ರನ್ನು ಶಿಕ್ಷಿಸುವಾಗ ನ್ಯಾಯವಾಗಿ ಶಿಕ್ಷಿಸುತ್ತಾನೆ. [27]ವ್ಯವಸಾ
ಯಗಾರನು ಜೀರಿಗೆಯನ್ನು ಒಕ್ಕುವದು ಹಲಿವೆ
ಯಿಂದಲ್ಲ, ಕೋಲಿನಿಂದಲೇ. ಜೀರಿಗೆಯನ್ನು ಕುದುರೆ
ಯಿಂದ ಗುಂಡನ್ನು ಉರುಳಿಸಿ ನುಚ್ಚುನೂರು ಮಾಡು
ವನೋ ಇಲ್ಲ! ಅವನೊಂದು ಸಣ್ಣ ಕೋಲನ್ನು
ಉಪಯೋಗಿಸುವನು.

[28]ಸ್ತ್ರೀಯು ರೊಟ್ಟಿಯನ್ನು ತಯಾರಿಸುವಾಗ ಹಿಟ್ಟನ್ನು
ಕೈಯಲ್ಲಿ ನಾದಿ ಅದನ್ನು ಚೆನ್ನಾಗಿ ಹದಗೊಳಿಸುವಳು.
ಆದರೆ ಆಕೆ ಹಾಗೆಯೇ ಮಾಡುತ್ತಾ ಇರುವದಿಲ್ಲ. ಅದೇ
ರೀತಿಯಲ್ಲಿ ಯೆಹೋವನು ಜನರನ್ನು ಶಿಕ್ಷಿಸುವನು.
ಆತನು ಬಂಡಿಯ ಚಕ್ರದಿಂದ ಬೆದರಿಸುವನು. ಆದರೆ
ಅವರನ್ನು ಸಂಪೂರ್ಣವಾಗಿ ಪುಡಿಮಾಡುವದಿಲ್ಲ. ಆದರೆ
ಅವರನ್ನು ತುಳಿದುಬಿಡಲು ಅನೇಕ ಕುದುರೆಗಳನ್ನು
ಉಪಯೋಗಿಸುವದಿಲ್ಲ. [29]ಈ ಪಾಠವು ಸರ್ವಶಕ್ತನಾದ
ದೇವರಿಂದ ಬರುತ್ತದೆ. ಯೆಹೋವನು ಆಶ್ಚರ್ಯಕರ
ವಾದ ಸಲಹೆಯನ್ನು ಕೊಡುತ್ತಾನೆ. ಆತನು ನಿಜ
ವಾಗಿಯೂ ಜ್ಞಾನಿ.

## ಜೆರುಸಲೇಮಿನ ಮೇಲೆ ದೇವರ ಪ್ರೀತಿ

29 ದೇವರು ಹೇಳುವದೇನೆಂದರೆ, ‘ಅರೀಯೇ
ಲನ್ನು ನೋಡು. ಅಲ್ಲಿ ದಾವೀದನು ಪಾಳೆಯ
ಮಾಡಿಕೊಂಡಿದ್ದನು. ಆಕೆಯ ಹಬ್ಬಗಳು ಪ್ರತಿ ವರುಷವೂ
ನಡೆಯುತ್ತಿವೆ. [2]ನಾನು ಅರೀಯೇಲನ್ನು ಶಿಕ್ಷಿಸಿದ್ದೇನೆ. ಆ
ನಗರವು ದುಃಖರೋಧನಗಳಿಂದ ತುಂಬಿದೆ. ಆದರೆ ಆಕೆ
ಯಾವಾಗಲೂ ನನ್ನ ಅರೀಯೇಲಾಗಿದ್ದಾಳೆ. [3]ನಿನ್ನ
ಸುತ್ತಲೂ ನಾನು ಸೈನ್ಯವನ್ನಿಟ್ಟಿದ್ದೇನೆ. ಅರೀಯೇಲೇ,
ನಿನಗೆ ವಿರುದ್ಧವಾಗಿ ನಾನು ಯುದ್ಧದ ಬುರುಜನ್ನು ಕಟ್ಟಿಸಿ
ರುತ್ತೇನೆ. [4]ನೀನು ಸೋತು ಹೋಗಿರುವೆ, ಮತ್ತು ನೆಲದ

ಮೇಲೆ ಕೆಡವಲ್ಪಟ್ಟಿರುವೆ. ಈಗ ನಿಮ್ಮ ಸ್ವರವು ಪ್ರೇತದ
ಸ್ವರ ದಂತೆ ನನಗೆ ಕೇಳಿಸುತ್ತದೆ. ಅದು ಬಲಹೀನವಾದ
ಸ್ವರವಾಗಿದೆ.'' [5]ನೆಲದ ಮೇಲೆ ಅನೇಕ ಅಪರಿಚಿತರು
ಧೂಳಿನ ಕಣಗಳಂತೆ ಇದ್ದಾರೆ. ಅನೇಕ ಮಂದಿ ದುಷ್ಟ
ಜನರು ಗಾಳಿಯಲ್ಲಿ ತೂರಿಹೋಗುವ ಹೊಟ್ಟಿನಂತಿ
ದ್ದಾರೆ. [6]ಸರ್ವಶಕ್ತನಾದ ಯೆಹೋವನು ನಿಮ್ಮನ್ನು
ಗುಡುಗು, ಮಹಾಶಬ್ದ, ಬಿರುಗಾಳಿ, ಚಂಡಮಾರುತ,
ದಹಿಸುವ ಅಗ್ನಿಜ್ವಾಲೆ ಇವುಗಳಿಂದ ಶಿಕ್ಷಿಸಿದನು.
[7]ಅರೀಯೇಲ್ ವಿರುದ್ಧವಾಗಿ ಅನೇಕಾನೇಕ ಜನಾಂಗ
ಗಳು ಯುದ್ಧಮಾಡಿದರು. ಅವೆಲ್ಲಾ ರಾತ್ರಿಕಾಲದ
ಭಯಂಕರ ಕನಸುಗಳಂತೆ ಇದ್ದವು. ಸೈನ್ಯವು ಅರೀಯೇ
ಲ್‌ಗೆ ಮುತ್ತಿಗೆ ಹಾಕಿ ಅದನ್ನು ಶಿಕ್ಷಿಸಿದವು. [8]ಅದು ಕೂಡಾ
ಸೈನ್ಯದವರಿಗೆ ಒಂದು ಕನಸಿನಂತಿರುವದು. ಅವರಿಗೆ
ಬೇಕಾದದ್ದು ದೊರಕುವದಿಲ್ಲ. ಹಸಿವೆಯಲ್ಲಿರುವ
ಒಬ್ಬನು ಆಹಾರದ ಕನಸು ಕಂಡಂತಿರುವದು. ಅವನು
ಎಚ್ಚರವಾದಾಗ ಹಸಿವಿನಿಂದಲೇ ಇರುವನು. ಬಾಯಾ
ರಿದ ಮನುಷ್ಯನು ನೀರಿಗಾಗಿ ಕಾಣುವ ಕನಸಿನಂತಿರು
ವುದು. ಅವನು ಎಚ್ಚರಗೊಂಡಾಗ ಬಾಯಾರಿಕೆಯು
ಇನ್ನೂ ಇರುವದು.

ಚೀಯೋನಿಗೆ ವಿರುದ್ಧ ಯುದ್ಧಮಾಡುವ ಆ
ಜನಾಂಗಗಳ ಗತಿಯು ಅಂತೆಯೇ ಇರುವದು.
ಅವರು ತಾವು ಆಶಿಸುವ ವಸ್ತುಗಳನ್ನು ಹೊಂದುವ
ದಿಲ್ಲ.
9 ಆಶ್ಚರ್ಯಪಡು, ಚಕಿತನಾಗು. ನೀನು ಮತ್ತ
ನಾಗುವೆ; ಆದರೆ ದ್ರಾಕ್ಷಾರಸದಿಂದಲ್ಲ. ನೋಡು,
ಆಶ್ಚರ್ಯಪಡು. ನೀನು ಮುಗ್ಗರಿಸಿಬೀಳುವೆ;
ಆದರೆ ಮತ್ತನಾದುದರ ಕಾರಣದಿಂದಲ್ಲ.
10 ಯೆಹೋವನು ನಿನಗೆ ತೂಕಡಿಕೆ ಬರಮಾಡುವನು.
ಆತನು ನಿನ್ನ ಕಣ್ಣುಗಳನ್ನು ಮುಚ್ಚುವನು. (ಪ್ರವಾದಿ
ಗಳು ನಿನ್ನ ಕಣ್ಣುಗಳಾಗಿದ್ದಾರೆ.) ಯೆಹೋವನು
ನಿನ್ನ ತಲೆಗಳನ್ನು ಮುಚ್ಚುವನು. (ಪ್ರವಾದಿಗಳು
ನಿನ್ನ ತಲೆಗಳಾಗಿದ್ದಾರೆ.)

[11]ನಾನು ಖಂಡಿತವಾಗಿ ಹೇಳುತ್ತೇನೆ, ಈ ಸಂಗತಿಗಳು
ನೆರವೇರುವವು. ಆದರೆ ನೀವು ನನ್ನನ್ನು ಅರ್ಥಮಾಡಿ
ಕೊಳ್ಳುವುದಿಲ್ಲ. ನನ್ನ ಮಾತುಗಳು ಒಂದು ಪುಸ್ತಕದಲ್ಲಿ
ಬರೆದು ಮುಚ್ಚಿ ಅದಕ್ಕೆ ಮುದ್ರೆ ಹಾಕಿ ಇರಿಸಿದಂತಿರು
ವದು. [12]ಓದುಬರುವವನಿಗೆ ಇದನ್ನು ಓದು ಎಂದು ಹೇಳಿ
ದರೆ ಅವನು, '' ಈ ಪುಸ್ತಕ ಮುಚ್ಚಲ್ಪಟ್ಟಿದೆ, ನನಗೆ ತೆರೆ
ಯಲು ಸಾಧ್ಯವಿಲ್ಲ''ಎಂದು ಹೇಳುವನು. ಓದುಬಾರದ
ಒಬ್ಬನಿಗೆ ಕೊಟ್ಟರೆ ಅವನು, ''ನನಗೂ ಓದಲು
ಬರುವದಿಲ್ಲ'' ಎಂದು ಹೇಳಿ ಪುಸ್ತಕವನ್ನು ಹಿಂದಕ್ಕೆ
ಕೊಡುವನು.
[13]ನನ್ನ ಒಡೆಯನು ಹೇಳುವದೇನೆಂದರೆ, ''ನನ್ನನ್ನು
ಪ್ರೀತಿಸುವದಾಗಿ ಇವರು ಹೇಳುತ್ತಾರೆ. ಅವರು ತಮ್ಮ
ಮಾತುಗಳಿಂದ ನನ್ನನ್ನು ಗೌರವಿಸುತ್ತಾರೆ. ಆದರೆ ಅವರ
ಹೃದಯಗಳು ನನ್ನಿಂದ ದೂರವಾಗಿವೆ. ಅವರು ನನಗೆ
ತೋರಿಸುವ ಗೌರವವು ಅವರು ಬಾಯಿಪಾಠ ಮಾಡಿದ
ಮಾನವ ನಿರ್ಮಿತವಾದ ನಿಯಮಗಳಾಗಿವೆ. [14]ನಾನು
ಅದ್ಭುತಕಾರ್ಯಗಳಿಂದ ಅವರನ್ನು ಆಶ್ಚರ್ಯಗೊಳಿ
ಸುತ್ತಾ ಇರುವೆನು. ಅವರ ಜ್ಞಾನಿಗಳು ತಮ್ಮ ಜ್ಞಾನವನ್ನು
ಕಳೆದುಕೊಳ್ಳುವರು; ಅವರು ಅರ್ಥಮಾಡಿಕೊಳ್ಳ
ಲಾರರು.''
[15]ಯೆಹೋವನಿಗೆ ತಮ್ಮ ಆಲೋಚನೆಗಳು ತಿಳಿಯ
ಬಾರದೆಂದು ಕುತಂತ್ರೋಪಾಯಗಳನ್ನು ಮಾಡಿ, ಕತ್ತಲೆ
ಯಲ್ಲಿ ದುಷ್ಟಕಾರ್ಯಗಳನ್ನು ಮಾಡುತ್ತಾ. ''ನಮ್ಮನ್ನು
ಯಾರು ನೋಡಬಲ್ಲರು, ನಮ್ಮನ್ನು ಯಾರು ಗುರುತಿಸ
ಬಲ್ಲರು'' ಎಂದುಕೊಳ್ಳುವವರ ಗತಿಯನ್ನು ಏನು
ಹೇಳಲಿ.
[16]ನೀವು ಗಲಿಬಿಲಿಗೊಂಡಿದ್ದೀರಿ. ಆವೆಮಣ್ಣು
ಕುಂಬಾರನಿಗೆ ಸಮಾನವಾಗಿದೆ ಎಂದು ಯೋಚಿಸುತ್ತೀರಿ.
ಒಂದು ವಸ್ತು ಅದರ ನಿರ್ಮಾಪಕನಿಗೆ, ''ನೀನು ನನ್ನನ್ನು
ನಿರ್ಮಿಸಲಿಲ್ಲ' ಎಂದು ಕೇಳಬಹುದು ಎಂದು ನೆನಸು
ತ್ತೀರಿ. ಒಂದು ಮಡಿಕೆಯು ಅದನ್ನು ಮಾಡಿದವನಿಗೆ,
''ನಿನಗೆ ಏನೂ ಗೊತ್ತಿಲ್ಲ'' ಎಂದು ಹೇಳಿದ ಹಾಗಾಯಿತು.

## ಒಳ್ಳೆಯ ಸಮಯವು ಬರುತ್ತಿದೆ

[17]ಇದು ಸತ್ಯ: ಸ್ವಲ್ಪ ಸಮಯದ ನಂತರ, ಕರ್ಮೆಲ್
ಬೆಟ್ಟದಂತೆ ಲೆಬನೋನ್ ಫಲವತ್ತಾಗುವದು. ಕರ್ಮೆಲ್
ಬೆಟ್ಟವು ದಟ್ಟ ಅಡವಿಯಾಗುವದು. [18]ಪುಸ್ತಕದಲ್ಲಿರುವ
ಮಾತುಗಳನ್ನು ಕಿವುಡನು ಕೇಳಿಸಿಕೊಳ್ಳುವನು. ಕುರು
ಡನು ಕತ್ತಲೆಯಲ್ಲಿಯೂ ಮಂಜು ತುಂಬಿದ್ದಾಗಲೂ
ನೋಡುವನು. [19]ದೀನರನ್ನು ಯೆಹೋವನು ಸಂತೋಷಿ
ಸುವಂತೆ ಮಾಡುವನು. ಬಡವರು ಇಸ್ರೇಲರ ಪರಿಶುದ್ಧ
ನಲ್ಲಿ ಉಲ್ಲಾಸಿಸುವರು.
[20]ಇದು ಕ್ರೂರಿಗಳೂ ದುಷ್ಟರೂ ನಾಶವಾದಾಗ ಆಗು
ವದು. ಕೆಟ್ಟಕಾರ್ಯಗಳನ್ನು ಮಾಡುವದರಲ್ಲಿ ಸಂತೋಷಿ
ಸುವವರು. ಇಲ್ಲದೆ ಹೋದಾಗ ಆ ಕಾರ್ಯಗಳು ನಡಿ
ಯುವವು. [21](ಅವರು ನೀತಿವಂತರ ವಿಷಯವಾಗಿ
ಸುಳ್ಳಾಡುವರು. ನ್ಯಾಯಾಲಯದಲ್ಲಿ ಜನರನ್ನು ಸಿಕ್ಕಿಸಿ
ಹಾಕುವವರು. ದೀನರನ್ನು ನಾಶಮಾಡಲು ಅವರು
ಪ್ರಯತ್ನಿಸುವರು.)

22ಯೆಹೋವನು ಯಾಕೋಬನ ವಂಶಕ್ಕೆ ಇಂತೆನ್ನು
ತ್ತಾನೆ: (ಅಬ್ರಹಾಮನನ್ನು ಬಿಡಿಸಿದ ಯೆಹೋವನೇ
ನಾನು.) ''ಈಗ ಯಾಕೋಬು (ಇಸ್ರೇಲ್ ಜನರು)
ನಾಚಿಕೆಪಡುವದಿಲ್ಲ ಮತ್ತು ಅವಮಾನ ಹೊಂದುವದಿಲ್ಲ.
23ಅವನು ತನ್ನ ಎಲ್ಲಾ ಮಕ್ಕಳನ್ನು ನೋಡಿ 'ಪವಿತ್ರ
ಎಂಬುದೇ ನನ್ನ ಹೆಸರು' ಎಂದು ಹೇಳುವನು. ನನ್ನ
ಕೈಗಳಿಂದ ನಾನು ಆ ಮಕ್ಕಳನ್ನು ನಿರ್ಮಿಸಿದೆನು. ಆ
ಮಕ್ಕಳು ಯಾಕೋಬನ ಪರಿಶುದ್ಧದೇವರು ವಿಶೇಷವಾದ
ವನು ಎಂದು ಹೇಳುವರು. ಆ ಮಕ್ಕಳು ಇಸ್ರೇಲರ ದೇವ
ರನ್ನು ಗೌರವಿಸುವರು. 24ಅವರಲ್ಲಿ ಅನೇಕರು ಸರಿಯಾಗಿ
ತಿಳಿದುಕೊಳ್ಳಲಿಲ್ಲ. ಆದುದರಿಂದ ಅವರು ತಪ್ಪಿ
ಹೋದರು. ಆದರೆ ಅವರು ಪಾಠಗಳನ್ನು ಕಲಿತು
ಕೊಳ್ಳುವರು.''

## ಇಸ್ರೇಲರು ದೇವರ ಮೇಲೆ ಭರವಸವಿಡಬೇಕು

30 ಯೆಹೋವನು ಇಂತೆನ್ನುತ್ತಾನೆ: ''ಈ ಮಕ್ಕಳನ್ನು
ನೋಡಿರಿ, ಅವರು ನನಗೆ ವಿಧೇಯರಾಗುತ್ತಿಲ್ಲ.
ಅವರು ಯೋಜನೆಗಳನ್ನು ತಯಾರಿಸುತ್ತಾರೆ, ಆದರೆ
ನನ್ನಿಂದ ಸಹಾಯವನ್ನು ಕೇಳುತ್ತಿಲ್ಲ. ಅವರು ಬೇರೆ
ರಾಜ್ಯಗಳೊಂದಿಗೆ ಒಪ್ಪಂದಮಾಡುತ್ತಾರೆ; ಆದರೆ ನನ್ನ
ಆತ್ಮವು ಅದಕ್ಕೆ ಒಪ್ಪುತ್ತಿಲ್ಲ. ಈ ಜನರು ತಮ್ಮ ಪಾಪಗಳಿಗೆ
ಇನ್ನೂ ಹೆಚ್ಚು ಪಾಪವನ್ನು ಕೂಡಿಸಿಟ್ಟುಕೊಳ್ಳುತ್ತಾರೆ. 2ಈ
ಮಕ್ಕಳು ಈಜಿಪ್ಟಿಗೆ ಸಹಾಯಕ್ಕಾಗಿ ಹೋಗುತ್ತಾರೆ, ಆದರೆ
ಅವರು ಹಾಗೆ ಮಾಡುವದು ಸರಿಯೋ ಎಂದು ನನ್ನ ಹತ್ತಿರ
ಕೇಳುವದಿಲ್ಲ. ಫರೋಹನು ತಮ್ಮನ್ನು ರಕ್ಷಿಸುತ್ತಾನೆಂದು
ಅವರು ತಿಳಿದಿದ್ದಾರೆ. ಈಜಿಪ್ಟೇ ತಮ್ಮನ್ನು ಕಾಪಾಡಬೇಕು
ಎಂಬುದು ಅವರ ಇಷ್ಟ.

3''ಆದರೆ ನಾನು ನಿಮಗೆ ಹೇಳುವದೇನೆಂದರೆ, ಈಜಿಪ್ಟಿ
ನಲ್ಲಿ ಅಡಗಿಕೊಂಡರೆ ಏನೂ ಪ್ರಯೋಜನವಾಗದು.
ಈಜಿಪ್ಟು ನಿಮ್ಮನ್ನು ರಕ್ಷಿಸಲಾರದು. 4ನಿಮ್ಮ ಅಧಿಕಾರಿಗಳು
ಚೋವನಿಗೆ ಹೋಗಿದ್ದಾರೆ, ನಿಮ್ಮ ರಾಯಭಾರಿಗಳು
ಹಾನೇಸಿಗೆ ಹೋಗಿದ್ದಾರೆ. 5ಆದರೆ ಅವರು ನಿರಾಶರಾಗು
ವರು. ತಮಗೆ ಸಹಾಯ ಮಾಡಲಶಕ್ಯವಾದ ರಾಜ್ಯಗಳಿಗೆ
ಸಹಾಯಕ್ಕಾಗಿ ಹೋಗಿದ್ದಾರೆ. ಈಜಿಪ್ಟು ನಿಷ್ಪ್ರಯೋಜಕ
ವಾಗಿದೆ. ಅದು ಸಹಾಯ ಮಾಡದು. ಅದು ನಾಚಿಕೆ,
ಅವಮಾನಗಳನ್ನು ಕೊಡುವದು.''

## ಯೆಹೂದಕ್ಕೆ ದೇವರ ಸಂದೇಶ

6ನೆಗೆವ್‌ನಲ್ಲಿರುವ ಪ್ರಾಣಿಗಳ ದುಃಖಕರವಾದ
ಸಂದೇಶ:

ನೆಗೆವ್ ಬಹು ಅಪಾಯಕಾರಿ ಸ್ಥಳ. ಸಿಂಹ, ವಿಷದ ಹಾವು
ಗಳು, ವೇಗವಾಗಿ ಚಲಿಸುವ ಹಾವುಗಳಿಂದ ಅದು
ತುಂಬಿದೆ. ಆದರೆ ಕೆಲವರು ನೆಗೆವ್ ಮೂಲಕ ಪ್ರಯಾಣ
ಮಾಡಿ ಈಜಿಪ್ಟಿಗೆ ಹೋಗುತ್ತಾರೆ. ಅವರು ತಮ್ಮ ಸಂಪತ್ತ
ನ್ನೆಲ್ಲಾ ಕತ್ತೆಯ ಮೇಲೆ ಹೊರಿಸಿರುತ್ತಾರೆ. ಅವರು ತಮ್ಮ
ಧನವನ್ನು ಒಂಟೆಯ ಮೇಲೆ ಹೊರಿಸಿರುತ್ತಾರೆ. ತಮಗೆ
ಸಹಾಯ ಮಾಡಲಾರದ ದೇಶದ ಮೇಲೆ ಜನರು ಭರವಸ
ವಿಟ್ಟಿದ್ದಾರೆ ಎಂಬುದೇ ಇದರರ್ಥ. 7ಈಜಿಪ್ಟ್ ಯಾವ
ಪ್ರಯೋಜನಕ್ಕೂ ಬಾರದು. ಅದರ ಸಹಾಯವು ಏನೂ
ಅಲ್ಲ. ಅದಕ್ಕಾಗಿ ನಾನು ಈಜಿಪ್ಟನ್ನು ''ಏನೂ ಮಾಡದ
ದೈತ್ಯಾಕಾರದ ಮೃಗ'' ಎಂದು ಕರೆಯುತ್ತೇನೆ.

8ಎಲ್ಲಾ ಜನರಿಗೆ ಕಾಣುವಂತೆ ಇದನ್ನು ಹಲಗೆಯ
ಮೇಲೆ ಬರೆ; ಪುಸ್ತಕದಲ್ಲೂ ಬರೆ. ಕೊನೆಯ ದಿವಸಗ
ಳಿಗಾಗಿ ಇದನ್ನು ಬರೆ. ಬಹುಕಾಲದ ನಂತರ ಇದು
ಸಂಭವಿಸುವದು.

9ಈ ಜನರು ಹೆತ್ತವರಿಗೆ ವಿಧೇಯರಾಗದ ಮಕ್ಕಳಂತಿ
ದ್ದಾರೆ. ಅವರು ಸುಳ್ಳಾಡಿಕೊಂಡು ಯೆಹೋವನ
ಬೋಧನೆಯನ್ನು ನಿರಾಕರಿಸುತ್ತಾರೆ. 10ಅವರು
ಪ್ರವಾದಿಗಳಿಗೆ, ''ನಾವು ಮಾಡಬೇಕಿರುವ ಕಾರ್ಯ
ಗಳ ಬಗ್ಗೆ ದೈವೋಕ್ತಿ ನುಡಿಯಬೇಡಿ, ನಮಗೆ ಸತ್ಯ
ವನ್ನು ತಿಳಿಸಬೇಡಿ. ನಮಗೊಪ್ಪುವ ಮನರಂಜನೆಯ
ಮಾತುಗಳನ್ನಾಡಿ. ನಮಗೋಸ್ಕರ ಒಳ್ಳೆಯ ಸಂಗತಿಗ
ಳನ್ನೇ ನಿಮ್ಮ ದರ್ಶನಗಳಲ್ಲಿ ನೋಡಿರಿ. 11ಸತ್ಯವಾಗಿ
ನಡೆಯುವ ವಿಷಯಗಳನ್ನು ನೀವು ದರ್ಶನದಲ್ಲಿ
ನೋಡಬೇಡಿ. ನಮ್ಮ ದಾರಿಯಿಂದ ತೊಲಗಿರಿ.
ಇಸ್ರೇಲಿನ ಪರಿಶುದ್ಧನ ಬಗ್ಗೆ ನಮಗೆ ಹೇಳುವದನ್ನು
ನಿಲ್ಲಿಸಿ ಬಿಡಿರಿ'' ಎಂದು ಹೇಳುವರು.

## ಯೆಹೂದಕ್ಕೆ ಸಹಾಯವು ಯೆಹೋವನಿಂದಲೇ ಬರುವದು

12ಇಸ್ರೇಲಿನ ಪರಿಶುದ್ಧನು ಹೇಳುವದೇನೆಂದರೆ,
''ಕರ್ತನಿಂದ ಬರುವ ಸಂದೇಶವನ್ನು ಅಂಗೀಕರಿಸಲು
ನೀವು ನಿರಾಕರಿಸುತ್ತೀರಿ. ನೀವು ನಿಮ್ಮ ಯುದ್ಧಗ
ಳಿಂದಲೂ ಸುಳ್ಳಾಡುವದರಿಂದಲೂ ನಿಮಗೆ ಸಹಾಯ
ಸಿಗುವದೆಂದು ಭರವಸೆಯಿಂದಿದ್ದೀರಿ. 13ನೀವು ತಪ್ಪಿತಸ್ಥ
ರಾಗಿದ್ದೀರಿ. ನೀವು ಬಿರುಕುಬಿಟ್ಟಿರುವ ಎತ್ತರದ ಗೋಡೆ
ಯಂತಿದ್ದೀರಿ. ಆ ಗೋಡೆಯು ಇದ್ದಕ್ಕಿದ್ದಂತೆ ನೆಲಕ್ಕುರುಳಿ
ಚೂರುಚೂರಾಗುವದು. 14ಒಂದು ದೊಡ್ಡ ಆವೆಮಣ್ಣಿನ
ಭರಣಿ ನಚ್ಚುನೂರಾಗಿ ಹೋಗುವಂತೆ ನೀವಿದ್ದೀರಿ.
ಅದರ ತುಂಡುಗಳಿಂದ ಏನೂ ಪ್ರಯೋಜನವಿಲ್ಲ. ಆ
ಭರಣಿಯ ಚೂರಿನಿಂದ ಸುಡುವ ಕಲ್ಲಿದ್ದಲನ್ನು ಹೊರ
ತೆಗೆಯಲು ಅಥವಾ ಅದರಿಂದ ನೀರು ಸೇದಲು
ಆಗುವದಿಲ್ಲ.''

[15]ನನ್ನ ಒಡೆಯನೂ ಇಸ್ರೇಲಿನ ಪರಿಶುದ್ಧನೂ ಹೇಳುವ
ದೇನೆಂದರೆ, ''ನೀವು ನನ್ನ ಕಡೆಗೆ ತಿರುಗಿಕೊಳ್ಳುವುದಾದರೆ
ನೀವು ರಕ್ಷಿಸಲ್ಪಡುವಿರಿ. ನೀವು ತಾಳ್ಮೆಯಿಂದ ನನ್ನ ಮೇಲೆ
ಭರವಸೆಯಿಟ್ಟರೆ, ನೀವು ಬಲವನ್ನು ಹೊಂದುವಿರಿ.''
ಆದರೆ ಹಾಗೆ ಮಾಡಲು ನಿಮಗೆ ಇಷ್ಟವಿಲ್ಲ. [16]ನೀವು
''ನಮಗೆ ಸಹಾಯ ಬೇಡ. ಓಡಿಹೋಗಲು ಕುದುರೆಗಳು
ಬೇಕು'' ಎಂದು ಹೇಳುವಿರಿ. ಅದು ಸರಿಯಾದ ಮಾತು.
ನೀವು ಕುದುರೆಗಳ ಮೂಲಕವೇ ಓಡುವಿರಿ. ಆದರೆ ಶತ್ರು
ಗಳು ನಿಮ್ಮನ್ನು ಹಿಂದಟ್ಟುವರು. ಅವರು ನಿಮ್ಮ ಕುದುರೆ
ಗಳಿಗಿಂತ ವೇಗಶಾಲಿಗಳಾಗಿದ್ದಾರೆ. [17]ಶತ್ರುವಿನಲ್ಲಿ
ಒಬ್ಬನು ಬೆದರಿಸಿದರೆ ನಿಮ್ಮಲ್ಲಿರುವ ಸಾವಿರ ಮಂದಿ
ಓಡುವರು. ಐದು ಮಂದಿ ವೈರಿಗಳು ಬೆದರಿಕೆ ಹಾಕಿದರೆ
ನೀವೆಲ್ಲರೂ ಅವರ ಮುಂದಿನಿಂದ ಓಡಿಹೋಗುವಿರಿ.
ಕೊನೆಗೆ ನಿಮ್ಮ ಸೈನ್ಯದಲ್ಲಿ ಉಳಿಯುವ ವಸ್ತು ಯಾವ
ದೆಂದರೆ ಬೆಟ್ಟದ ಮೇಲೆ ನೆಟ್ಟಿರುವ ನಿಮ್ಮ ಧ್ವಜ ಸ್ತಂಭ
ವೊಂದೇ.

[18]ಯೆಹೋವನು ನಿಮಗೆ ಕರುಣೆ ತೋರಿಸಲು ಇಷ್ಟ
ಪಡುತ್ತಾನೆ. ಆತನು ನಿಮ್ಮನ್ನು ಎದುರು ನೋಡುತ್ತಿದ್ದಾನೆ.
ಆತನು ಎದ್ದು ನಿಮ್ಮನ್ನು ಸಂತೈಸಲು ಬಯಸುತ್ತಾನೆ. ದೇವ
ರಾದ ಯೆಹೋವನು ನ್ಯಾಯವಂತನಾಗಿದ್ದಾನೆ. ಆತನ
ಸಹಾಯವನ್ನು ನಿರೀಕ್ಷಿಸುವವರೆಲ್ಲರೂ ಆಶೀರ್ವದಿ
ಸಲ್ಪಡುವರು.

[19]ಚೀಯೋನ್ ಪರ್ವತದಲ್ಲಿರುವ ಜೆರುಸಲೇಮಿನಲ್ಲಿ
ಯೆಹೋವನ ಜನರು ವಾಸಿಸುವರು. ನೀವು ಇನ್ನು ಮೇಲೆ
ಅಳುವದಿಲ್ಲ. ಯೆಹೋವನು ನಿಮ್ಮ ಅಳುವಿಕೆಯನ್ನು
ನೋಡಿ ನಿಮ್ಮನ್ನು ಆದರಿಸುವನು. ಆತನು ನಿಮ್ಮ ಮೊರೆ
ಯನ್ನು ಕೇಳಿ ನಿಮಗೆ ಸಹಾಯಿಸುವನು.

## ದೇವರು ತನ್ನ ಜನರಿಗೆ ಸಹಾಯ ಮಾಡುವನು

[20]ಹಿಂದಿನ ದಿವಸಗಳಲ್ಲಿ ನನ್ನ ಒಡೆಯನು ನಿಮಗೆ
ದುಃಖವನ್ನೂ ಬೇನೆಯನ್ನೂ ಕೊಟ್ಟನು. ಅದು ನಿಮಗೆ
ದಿನನಿತ್ಯ ತಿನ್ನುವಂಥ ರೊಟ್ಟಿಯಂತೆಯೂ ನೀರಿ
ನಂತೆಯೂ ಇತ್ತು. ಆದರೆ ನಿಮ್ಮ ಬೋಧಕನಾದ ದೇವರು
ನಿಮ್ಮಿಂದ ಎಂದಿಗೂ ಅಡಗಿಕೊಂಡಿರಲಾರನು. ನಿಮ್ಮ
ಬೋಧಕನನ್ನು ನೀವು ಕಣ್ಣಾರೆ ಕಾಣುವಿರಿ. [21]ಆದರೆ
ನೀವು ತಪ್ಪು ಕಾರ್ಯಮಾಡಿದರೆ, ದುಷ್ಟತ್ವದಲ್ಲಿ ಜೀವಿಸಿ
ದರೆ ನಿಮ್ಮ ಹಿಂದಿನಿಂದ ಒಂದು ಸ್ವರ, '' ಇದು ಸರಿಯಾದ
ಮಾರ್ಗ. ಈ ಮಾರ್ಗದಲ್ಲಿ ಮುಂದುವರಿಯಿರಿ'' ಎಂದು
ಹೇಳುವುದು ಕೇಳಿಸುವದು.

[22]ನಿಮ್ಮಲ್ಲಿ ಬೆಳ್ಳಿಬಂಗಾರಗಳ ವಿಗ್ರಹಗಳಿವೆ. ಆ ಸುಳ್ಳು
ದೇವರುಗಳು ನಿಮ್ಮನ್ನು ಹೊಲೆಯನ್ನಾಗಿ ಮಾಡಿವೆ. ನೀವು
ಅವುಗಳ ಸೇವೆಯನ್ನು ನಿಲ್ಲಿಸುವಿರಿ. ಅವು ಹೊಲಸು
ವಸ್ತುಗಳೋ ಎಂಬಂತೆ ಅವುಗಳನ್ನೆತ್ತಿ ಬಿಸಾಡಿ ಬಿಡುವಿರಿ.
[23]ಆ ಸಮಯದಲ್ಲಿ ಯೆಹೋವನು ನಿಮಗಾಗಿ ಮಳೆ
ಸುರಿಸುವನು. ನೀವು ಭೂಮಿಯಲ್ಲಿ ಬೀಜ ಬಿತ್ತಿದ್ದಾಗ
ಫಸಲನ್ನು ಹೊಂದುವಿರಿ. ನಿಮಗೆ ಬಹುದೊಡ್ಡ ಸುಗ್ಗಿ
ಆಗುವದು.ಹೊಲದಲ್ಲಿ ನಿಮ್ಮ ಪಶುಗಳಿಗೆ ಬೇಕಾದಷ್ಟು
ಹುಲ್ಲು ಇರುವದು. ಮೇಯಲು ನಿಮ್ಮ ಕುರಿಗಳಿಗೆ ಬೇಕಾ
ದಷ್ಟು ಬಯಲಿವೆ. [24]ನಿಮ್ಮ ದನಕರುಗಳಿಗೂ ಕತ್ತೆಗಳಿಗೂ
ಬೇಕಾದಷ್ಟು ಮೇವಿದೆ. ಆಹಾರವು ಯಥೇಚ್ಛವಾಗಿರು
ವದು. ನಿಮ್ಮ ದನಕರುಗಳು ಮೊರದಿಂದಲೂ ಕವೇ
ಕೋಲಿನಿಂದಲೂ ತೂರಿದ ಉಪ್ಪುಪ್ಪಾದ ಮೇವನ್ನು
ತಿನ್ನುವವು. [25]ಪ್ರತಿಯೊಂದು ಬೆಟ್ಟದಲ್ಲಿಯೂ ಪರ್ವತದ
ಲ್ಲಿಯೂ ಹರಿಯುವ ನೀರಿನ ತೊರೆಗಳಿರುವವು. ಇವೆಲ್ಲಾ
ಅನೇಕ ಜನರು ಕೊಲ್ಲಲ್ಪಟ್ಟ ನಂತರವೂ ಬುರುಜುಗಳು
ಕೆಡವಲ್ಪಟ್ಟ ನಂತರವೂ ಸಂಭವಿಸುವವು.

[26]ಆ ಸಮಯದಲ್ಲಿ ಚಂದ್ರನ ಪ್ರಕಾಶವು ಸೂರ್ಯ
ನಂತಿರುವದು. ಸೂರ್ಯನ ಪ್ರಕಾಶವು ಈಗ ಇರುವದ
ಕ್ಕಿಂತ ಏಳರಷ್ಟು ಹೆಚ್ಚಾಗಿರುವದು. ಸೂರ್ಯನ ಒಂದು
ದಿವಸದ ಬೆಳಕು ಒಂದು ವಾರದ ಬೆಳಕಿನಷ್ಟಿರುವದು.
ಯೆಹೋವನು ತನ್ನ ಮುರಿದುಹೋದ ಜನರಿಗೆ ಆದ
ಗಾಯದ ಪೆಟ್ಟುಗಳನ್ನು ಗುಣಪಡಿಸುವಾಗ ಇವೆಲ್ಲಾ
ಸಂಭವಿಸುತ್ತವೆ.

[27]ಇಗೋ, ಯೆಹೋವನ ನಾಮವು ಬಹುದೂರದಿಂದ
ಬರುವದು. ಆತನ ಕೋಪವು ದಟ್ಟವಾದ ಹೊಗೆ
ಯೊಂದಿಗೆ ಇರುವ ಬೆಂಕಿಯೋಪಾದಿಯಲ್ಲಿರುವದು.
ಯೆಹೋವನ ಬಾಯಿ ಕೋಪದಿಂದಲೂ ನಾಲಿಗೆಯು
ಸುಡುವ ಬೆಂಕಿಯಂತೆಯೂ ಇರುವದು. [28]ಆತನ ಶ್ವಾಸವು
(ಆತ್ಮ) ಒಂದು ಮಹಾನದಿಯಂತಿರುವದು. ಅದರ
ನೀರು ಕುತ್ತಿಗೆಯ ತನಕ ಏರುವದು. ಯೆಹೋ ವನು
ಜನಾಂಗಗಳಿಗೆ ನ್ಯಾಯತೀರಿಸುವನು. ಅವುಗಳನ್ನು
ಜರಡಿಯಿಂದ ಜಲಾಡಿಸುವನು. ಯೆಹೋವನು ಅವುಗ
ಳನ್ನು ನಿಯಂತ್ರಿಸುವನು. ಅದು ಪ್ರಾಣಿಗಳನ್ನು ನಿಯಂತ್ರಿ
ಸುವ ಬಾಯಿಯಲ್ಲಿ ಹಾಕುವ ಕಡಿವಾಣದಂತಿರುವದು.

[29]ಆ ಸಮಯದಲ್ಲಿ ನೀವು ಹರ್ಷಗಾನ ಹಾಡುವಿರಿ.
ಅದು ಹಬ್ಬದ ರಾತ್ರಿಯ ಸಮಯದಂತಿರುವದು. ದೇವರ
ಪರ್ವತದಲ್ಲಿ ನಡೆಯುತ್ತಿರುವಾಗ ನೀವು ಅತ್ಯಂತ
ಸಂತೋಷಪಡುವಿರಿ. ಇಸ್ರೇಲಿನ ಬಂಡೆಯಾಗಿರುವ
ಯೆಹೋವನನ್ನು ಆರಾಧಿಸಲು ಹೋಗುವಾಗ ಕೊಳಲಿನ
ಗಾನವನ್ನು ಕೇಳಿ ಸಂತೋಷಿಸುವಿರಿ.

[30]ಯೆಹೋವನು ತನ್ನ ಮಹಾಸ್ವರವನ್ನು ಜನರು ಕೇಳು
ವಂತೆ ಮಾಡುವನು. ತನ್ನ ಸಾಮರ್ಥ್ಯದ ಬಾಹುವು ಕೋಪ
ದಿಂದ ನಡುಗುವದನ್ನು ಜನರು ನೋಡುವಂತೆ

ಮಾಡುವನು. ಆ ಬಾಹುವು ಎಲ್ಲವನ್ನು ಸುಡುವ ದೊಡ್ಡ
ಅಗ್ನಿಯಂತಿರುವದು. ಯೆಹೋವನ ಶಕ್ತಿಯು ಆಲಿಕಲ್ಲಿ
ನಿಂದಲೂ ಮಳೆಯಿಂದಲೂ ಕೂಡಿರುವ ಬಿರುಗಾಳಿ
ಯಂತಿರುವುದು. [31]ಯೆಹೋವನ ಸ್ವರವನ್ನು ಕೇಳುವಾಗ
ಅಶ್ಶೂರವು ನಡುಗುವದು. ಆತನು ಕೋಲಿನಿಂದ
ಅಶ್ಶೂರವನ್ನು ಹೊಡೆಯುವನು. [32]ಅಶ್ಶೂರವನ್ನು
ಆತನು ಹೊಡೆಯುವಾಗ ಹಾರ್ಪ್ ವಾದ್ಯಗಳನ್ನು ಮತ್ತು
ದಮ್ಮಡಿಗಳನ್ನು ಬಾರಿಸಿದಂತಾಗುವದು. ಯೆಹೋವನು
ಅಶ್ಶೂರವನ್ನು ತನ್ನ ಮಹಾಭುಜದಿಂದ (ಶಕ್ತಿಯಿಂದ)
ಸೋಲಿಸುವನು.

[33]ಬಹುಕಾಲದವರೆಗೆ ಟೋಫೆತ್ ಸಿದ್ಧವಾಗಿತ್ತು. ಅದು
ರಾಜನಿಗಾಗಿ ಸಿದ್ಧವಾಗಿದೆ. ಅದು ಆಳವಾಗಿಯೂ ಅಗಲ
ವಾಗಿಯೂ ಮಾಡಲ್ಪಟ್ಟಿದೆ. ಅಲ್ಲಿ ಒಂದು ದೊಡ್ಡ ಕಟ್ಟಿ
ಗೆಯ ರಾಶಿಯೂ, ಬೆಂಕಿಯೂ ಇದೆ ಮತ್ತು ಯೆಹೋ
ವನ ಬಾಯುಸಿರು ಗಂಧಕದಂತೆ ಬಂದು ಎಲ್ಲವನ್ನು
ನಾಶಮಾಡುವದು.

31 ಸಹಾಯಕ್ಕಾಗಿ ಈಜಿಪ್ಟಿಗೆ ಹೋಗುವ ಜನರನ್ನು
ನೋಡಿರಿ. ಆ ಜನರು ಕುದುರೆಗಳಿಗಾಗಿ ಕೇಳು
ತ್ತಿದ್ದಾರೆ. ಕುದುರೆಗಳು ಅವರನ್ನು ರಕ್ಷಿಸುತ್ತವೆ ಎಂದು
ಅವರು ಭಾವಿಸುತ್ತಾರೆ. ಈಜಿಪ್ಟಿನ ರಥಗಳು ಮತ್ತು
ಕುದುರೆಗಳು ಅವರನ್ನು ಕಾಪಾಡುವವು ಎಂದು ಜನರು
ತಿಳಿದುಕೊಳ್ಳುತ್ತಾರೆ. ಸೈನ್ಯವು ದೊಡ್ಡದಾಗಿರುವದರಿಂದ
ಯಾವ ಅಪಾಯವೂ ಬಾರದು ಎಂದು ಅವರು ತಿಳಿದು
ಕೊಳ್ಳುತ್ತಾರೆ. ಜನರು ಇಸ್ರೇಲಿನ ಪರಿಶುದ್ಧನನ್ನು ನಂಬು
ವದಿಲ್ಲ. ಅವರು ಯೆಹೋವನ ಸಹಾಯವನ್ನು
ಕೋರುವದಿಲ್ಲ.

[2]ಆದರೆ ಯೆಹೋವನು ಜ್ಞಾನವಂತನಾಗಿದ್ದಾನೆ.
ಆತನೇ ಅವರಿಗೆ ವಿರುದ್ಧವಾಗಿ ಸಂಕಟಗಳನ್ನು ಬರ
ಮಾಡುವನು. ದೇವರ ಆಜ್ಞೆಯನ್ನು ಜನರು ಬದಲಾಯಿ
ಸಲಾಗುವದಿಲ್ಲ. ಯೆಹೋವನು ಎದ್ದು ದುಷ್ಟ ಜನರ
(ಯೆಹೂದ) ವಿರುದ್ಧ ಯುದ್ಧ ಮಾಡುವನು. ಮತ್ತು ಅವ
ರಿಗೆ ಸಹಾಯ ಕೊಡುವವರ (ಈಜಿಪ್ಟ್) ವಿರುದ್ಧ
ವಾಗಿಯೂ ಯುದ್ಧ ಮಾಡುವನು.

[3]ಈಜಿಪ್ಟಿನ ಜನರು ಮನುಷ್ಯಮಾತ್ರದವರೇ. ಅವರು
ದೇವರಲ್ಲ. ಈಜಿಪ್ಟಿನ ಕುದುರೆಗಳು ಪ್ರಾಣಿಗಳಾಗಿವೆ.
ಅವುಗಳು ಆತ್ಮವಲ್ಲ. ಯೆಹೋವನು ತನ್ನ ಕೈಯನ್ನು
ಚಾಚುವಾಗ ಸಹಾಯವಮಾಡುವವನು (ಈಜಿಪ್ಟ್)
ಸೋಲುವನು. ಸಹಾಯಬೇಕಾದವರು (ಯೆಹೂದವು)
ಬೀಳುವರು. ಅವರೆಲ್ಲರೂ ನಾಶವಾಗುವರು.

[4]ಯೆಹೋವನು ನನಗೆ ಹೀಗೆ ಹೇಳಿದನು: ‘‘ಸಿಂಹವು
ಒಂದು ಪ್ರಾಣಿಯನ್ನು ಹಿಡಿದು ಕೊಂದಾಗ ಅದರ ಮೇಲೆ
ನಿಂತು ಗರ್ಜಿಸುವದು. ಆ ಸಮಯದಲ್ಲಿ ಯಾವುದೂ ಆ
ಸಿಂಹವನ್ನು ಹೆದರಿಸಲಾರದು. ಜನರು ಬಂದು ಗಟ್ಟಿ
ಯಾಗಿ ಚೀರಿಕೊಂಡರೂ ಸಿಂಹಕ್ಕೆ ಹೆದರಿಕೆಯುಂಟಾ
ಗದು; ದೊಡ್ಡ ಶಬ್ದ ಮಾಡಿದರೂ ಸಿಂಹವು ಓಡಿ
ಹೋಗದು.’’

ಅದೇ ರೀತಿಯಲ್ಲಿ ಸರ್ವಶಕ್ತನಾದ ಯೆಹೋವನು
ಚೀಯೋನ್ ಪರ್ವತಕ್ಕೆ ಬಂದು ಯುದ್ಧ ಮಾಡುವನು.
[5]ಆತನು ಜೆರುಸಲೇಮನ್ನು ಹಕ್ಕಿಯು ತನ್ನ ಗೂಡಿನ
ಸುತ್ತಲೂ ಹಾರಾಡುತ್ತಾ ಕಾಪಾಡುವಂತೆ ಸಂರಕ್ಷಿಸುವನು.
ಯೆಹೋವನು ಜೆರುಸಲೇಮನ್ನು ರಕ್ಷಿಸುವನು.
ಯೆಹೋವನು ‘‘ಹಾದು ಹೋಗಿ’’ ಜೆರುಸಲೇಮನ್ನು
ರಕ್ಷಿಸುವನು.

[6]ದೇವರಿಗೆ ವಿರುದ್ಧವಾಗಿರುವ ಇಸ್ರೇಲಿನ ಮಕ್ಕಳೇ,
ನೀವು ದೇವರ ಬಳಿಗೆ ಹಿಂತಿರುಗಿ ಬನ್ನಿರಿ. [7]ಆಗ ಜನರು
ತಯಾರಿಸಿರುವ ಬೆಳ್ಳಿಬಂಗಾರದ ವಿಗ್ರಹಗಳನ್ನು
ಪೂಜಿಸುವದನ್ನು ನಿಲ್ಲಿಸುವರು. ನೀವು ಆ ವಿಗ್ರಹಗಳನ್ನು
ತಯಾರಿಸಿದಾಗ ನಿಜವಾಗಿಯೂ ಪಾಪಮಾಡಿದಿರಿ.

[8]ಅಶ್ಶೂರವು ಖಡ್ಗದಿಂದ ನಾಶವಾಗುವದು ಖಂಡಿತ.
ಆದರೆ ಆ ಖಡ್ಗವು ಮನುಷ್ಯನ ಕತ್ತಿಯಲ್ಲ. ಅಶ್ಶೂರವು
ದೇವರ ಖಡ್ಗದಿಂದ ಓಡಿಹೋಗುವದು. ಅದರ ಯೌವ
ನಸ್ಥರು ಸೆರೆಹಿಡಿಯಲ್ಪಟ್ಟು ಗುಲಾಮರನ್ನಾಗಿ ಮಾಡಲ್ಪ
ಡುವರು. [9]ಅವರ ಸುರಕ್ಷತೆಯ ಸ್ಥಳ ನಾಶವಾಗುವದು.
ಅವರ ಅಧಿಪತಿಗಳು ಧ್ವಜವನ್ನು ಬಿಟ್ಟು ಸೋತು
ಹೋಗುವರು.

ಯೆಹೋವನೇ ಇದನ್ನು ನುಡಿದಿದ್ದಾನೆ. ಆತನ ವೇದಿ
ಕೆಯು ಚೀಯೋನಿನಲ್ಲಿದೆ. ಆತನ ಒಲೆಯು (ಯಜ್ಞ
ವೇದಿಕೆಯು) ಜೆರುಸಲೇಮಿನಲ್ಲಿದೆ.

### ಅಧಿಪತಿಗಳು ನೀತಿನ್ಯಾಯವುಳ್ಳವರಾಗಿರಬೇಕು

32 ನನ್ನ ಮಾತುಗಳನ್ನು ಕೇಳಿರಿ. ರಾಜ್ಯದಲ್ಲಿ
ಧರ್ಮವು ನೆಲೆಗೊಳ್ಳುವಂತೆ ರಾಜನು ರಾಜ್ಯ
ವಾಳಬೇಕು. ಅಧಿಕಾರಿಗಳು ನ್ಯಾಯದಿಂದ ಜನರನ್ನು
ನಡೆಸಿಕೊಂಡು ಹೋಗಬೇಕು. [2]ಹೀಗಿದ್ದಲ್ಲಿ ರಾಜನು
ಮಳೆಯಲ್ಲಿ ಆಶ್ರಯ ಸ್ಥಳವಾಗಿಯೂ ಗಾಳಿಯಲ್ಲಿ ಮರೆ
ಯಂತೆಯೂ ಮರುಭೂಮಿಯಲ್ಲಿ ಒರತೆಯಂತೆಯೂ
ಬೆಂಗಾಡಿನಲ್ಲಿ ಬಂಡೆಯ ನೆರಳಿನಂತೆಯೂ ಇರುವನು.
[3]ಜನರು ಸಹಾಯಕ್ಕಾಗಿ ರಾಜನ ಕಡೆಗೆ ನೋಡುವರು.
ಅವನು ಹೇಳಿದ್ದನ್ನು ಅವರು ಕೇಳುವರು. [4]ಈಗ ಗಲಿಬಿಲಿ
ಯಲ್ಲಿರುವವರು ವಿಷಯವನ್ನು ಸ್ಪಷ್ಟವಾಗಿ ಮತ್ತು
ಕೂಡಲೇ ತಿಳಿದುಕೊಳ್ಳುವರು. ಈಗ ಸ್ಪಷ್ಟವಾಗಿ ಮಾತಾಡ
ಲಾರದ ಜನರು ಸ್ಪಷ್ಟವಾಗಿಯೂ ಸರಾಗವಾಗಿಯೂ
ಮಾತಾಡ ಶಕ್ತರಾಗುವರು. [5]ದುಷ್ಟರನ್ನು ಮಹಾ

ವ್ಯಕ್ತಿಗಳೆಂದು ಕರೆಯುವದಿಲ್ಲ. ನೀಚನನ್ನು ಘನವಂತ
ನೆಂದು ಕರೆಯುವದಿಲ್ಲ.
[6]ದುಷ್ಟನು ದುಷ್ಟತೆಯ ಬಗ್ಗೆ ಮಾತನಾಡುವನು. ದುಷ್ಟ
ಕಾರ್ಯಗಳನ್ನು ಮಾಡಲು ತನ್ನ ಹೃದಯದಲ್ಲಿ ಆಲೋಚಿ
ಸುವನು. ದುಷ್ಟನು ಯೆಹೋವನ ಬಗ್ಗೆ ಕೆಟ್ಟವುಗಳನ್ನು
ಹೇಳುತ್ತಾನೆ. ಹಸಿದವರಿಗೆ ಆಹಾರವನ್ನು ತಿನ್ನುವದಕ್ಕಾ
ಗಲೀ ಬಾಯಾರಿದವರಿಗೆ ನೀರನ್ನು ಕುಡಿಯುವದಕ್ಕಾ
ಗಲೀ ಅವನು ಬಿಡುವದಿಲ್ಲ. [7]ದುಷ್ಟನು ದುಷ್ಟತನವನ್ನು
ಉಪಕರಣವನ್ನಾಗಿ ಬಳಸಿಕೊಳ್ಳುವನು. ಬಡಜನರಿಂದ
ಪ್ರತಿಯೊಂದನ್ನು ತೆಗೆದುಕೊಳ್ಳಲು ಅವನು ಆಲೋಚಿಸು
ವನು, ಸುಳ್ಳುಗಳನ್ನು ಹೇಳುವನು. ಅವನ ಸುಳ್ಳುಗಳು
ಬಡವನಿಗೆ ನ್ಯಾಯದೊರಕದಂತೆ ಮಾಡುತ್ತವೆ.
[8]ಆದರೆ ಒಬ್ಬ ಒಳ್ಳೆಯ ನಾಯಕನು ಒಳ್ಳೆಯ ಕಾರ್ಯ
ಗಳನ್ನು ಮಾಡಲು ಆಲೋಚಿಸುವನು. ಅಂಥವನು
ಒಳ್ಳೆಯ ನಾಯಕನಾಗಿರುವನು.

### ಸಂಕಟದ ದಿವಸಗಳು ಬರುವವು

[9]ಹೆಂಗಸರಲ್ಲಿ ಕೆಲವರು ಈಗ ಶಾಂತರಾಗಿದ್ದಾರೆ. ಈಗ
ನೀವು ಸುರಕ್ಷಿತರಾಗಿದ್ದೀರಿ ಎಂದು ನಿಮಗೆ ಅನ್ನಿಸುತ್ತದೆ.
ಆದರೆ ನೀವು ಸುಮ್ಮನಿದ್ದು ನಾನು ಹೇಳುವ ಮಾತುಗಳನ್ನು
ಕೇಳಬೇಕು. [10]ಸ್ತ್ರೀಯರೇ, ನೀವೀಗ ಭದ್ರವಾಗಿದ್ದೀರಿ
ಎಂದು ನೀವು ನೆನಸುತ್ತೀರಿ ಆದರೆ ಒಂದು ವರ್ಷದ
ನಂತರ ನಿಮಗೆ ಸಂಕಟವು ಪ್ರಾರಂಭವಾಗುವದು.
ಮುಂದಿನ ವರ್ಷ ನೀವು ದ್ರಾಕ್ಷೆಹಣ್ಣುಗಳನ್ನು ಕೂಡಿಸುವ
ದಿಲ್ಲ. ಕೂಡಿಸಲು ದ್ರಾಕ್ಷೆ ಹಣ್ಣುಗಳೇ ಇರುವದಿಲ್ಲ.
[11]ಸ್ತ್ರೀಯರೇ, ನೀವೀಗ ಶಾಂತರಾಗಿದ್ದೀರಿ. ಆದರೆ
ನೀವು ಭಯಪಡುವವರಾಗಿರಬೇಕು. ನೀವು ಈಗ
ಸುರಕ್ಷಿತರಾಗಿದ್ದೀರಿ, ಆದರೆ ನೀವು ಚಿಂತಿಸುವವರಾಗಿರ
ಬೇಕು. ನಿಮ್ಮ ಒಳ್ಳೆಯ ವಸ್ತ್ರಗಳನ್ನು ತೆಗೆದಿಟ್ಟು ಶೋಕ
ಬಟ್ಟೆಯನ್ನು ಧರಿಸಿರಿ. ಆ ಬಟ್ಟೆಗಳನ್ನು ನಿಮ್ಮ ಸೊಂಟಕ್ಕೆ
ಕಟ್ಟಿಕೊಳ್ಳಿರಿ. [12]ಶೋಕವಸ್ತ್ರಗಳನ್ನು ದುಃಖದಿಂದ
ತುಂಬಿದ ನಿಮ್ಮ ಎದೆಗಳ ಮೇಲೆ ಹಾಕಿಕೊಳ್ಳಿ.
ನಿಮ್ಮ ಹೊಲಗಳು ನಿಷ್ಪ್ರಯೋಜಕವಾಗಿರುವದಕ್ಕಾಗಿ
ಅಳಿರಿ. ನಿಮ್ಮ ದ್ರಾಕ್ಷಿತೋಟವು ಒಳ್ಳೆಯ ಫಲ ಕೊಡು
ತಿತ್ತು. ಆದರೆ ಈಗ ತೋಟವು ಖಾಲಿಯಾಗಿದೆ. [13]ನನ್ನ
ಜನರ ದೇಶಕ್ಕಾಗಿ ಕೂಗಿರಿ. ಯಾಕೆಂದರೆ ಅದರಲ್ಲಿ
ಕೇವಲ ಹಣಜಿಯೂ ಮುಳ್ಳುಗಿಡಗಳೂ ಬೆಳೆಯುತ್ತವೆ.
ಒಂದು ಕಾಲದಲ್ಲಿ ಸಂತೋಷಭರಿತವಾಗಿದ್ದ ಪಟ್ಟಣ
ಕ್ಕಾಗಿಯೂ ಎಲ್ಲಾ ಮನೆಗಳಿಗಾಗಿಯೂ ಅಳಿರಿ.
[14]ಜನರು ರಾಜಧಾನಿಯನ್ನು ತೊರೆದುಬಿಡುವರು.
ಅರಮನೆ, ಬುರುಜುಗಳೆಲ್ಲವೂ ನಿರ್ಜನವಾಗಿವೆ. ಜನರು
ಮನೆಗಳಲ್ಲಿ ವಾಸಿಸದೆ ಗುಹೆಗಳಲ್ಲಿ ವಾಸಮಾಡುವರು.
ಕಾಡುಕತ್ತೆಗಳೂ ಕುರಿಗಳೂ ನಗರದಲ್ಲಿ ವಾಸಿಸುವವು.
ಪಶುಗಳು ಅಲ್ಲಿ ಹುಲ್ಲು ಮೇಯುವವು.
[15-16]ದೇವರು ನಮಗೆ ತನ್ನ ಆತ್ಮವನ್ನು ಸುರಿಸುವತನಕ
ಇದು ಮುಂದುವರಿಯುವದು. ಈಗ ಯಾವ ಒಳ್ಳೆಯ
ಸಂಗತಿಗಳು ನಡೆಯದೆ ಇರುವದರಿಂದ ದೇಶವು ಮರು
ಭೂಮಿಯಂತಿದೆ. ಆದರೆ ಮುಂದಿನ ದಿವಸಗಳಲ್ಲಿ ಮರು
ಭೂಮಿಯು ಕರ್ಮೆಲ್ ಪ್ರಾಂತ್ಯದಂತೆ ಆಗಿ ನ್ಯಾಯ
ಧರ್ಮಗಳು ಅಲ್ಲಿ ನೆಲೆಸುವವು. ಕರ್ಮೆಲ್ ಹಸಿರು ಕಾಡಾ
ಗಿದ್ದು ಶುಭವು ನೆಲೆಸಿರುವುದು. [17]ಆದ್ದರಿಂದ ಅಲ್ಲಿ ಆ
ಸಮಾಧಾನ ಮತ್ತು ಭದ್ರತೆ ನಿತ್ಯವೂ ಶಾಶ್ವತವಾಗಿರುವವು.
[18]ನನ್ನ ಜನರು ಮನೋಹರವಾಗಿರುವ ಶಾಂತಿಮಯ
ವಾದ ಭೂಮಿಯಲ್ಲಿಯೂ ಸುರಕ್ಷಿತವಾದ ಗುಡಾರಗಳ
ಲ್ಲಿಯೂ ಪ್ರಶಾಂತವಾದ ಮತ್ತು ನಿಶಬ್ದವಾದ ಸ್ಥಳಗಳ
ಲ್ಲಿಯೂ ವಾಸಿಸುವರು.
[19]ಇವು ಸಂಭವಿಸುವ ಮೊದಲು ಅರಣ್ಯವು ನಾಶವಾಗ
ಬೇಕು. ಪಟ್ಟಣವು ಶತ್ರು ವಶವಾಗಬೇಕು. [20]ನಿಮ್ಮಲ್ಲಿ
ಕೆಲವರು ಪ್ರತಿಯೊಂದು ನೀರಿನ ತೊರೆಗಳ ಬಳಿಯಲ್ಲಿ
ಬೀಜ ಬಿತ್ತುವರು. ಅದರ ಸುತ್ತಲೂ ಹೋಗಿ ಯಾವ
ಆತಂಕವಿಲ್ಲದೆ ತಿನ್ನಲು ನೀವು ನಿಮ್ಮ ಪಶುಗಳನ್ನು
ಬಿಡುವಿರಿ; ಸಂತಸದಿಂದ ಇರುವಿರಿ.

### ದುಷ್ಟತನವು ಹೆಚ್ಚಿನ ದುಷ್ಟತನಕ್ಕೆ ಕಾರಣ

33 ನೀವು ಯುದ್ಧಮಾಡಿ ಇತರರಿಂದ ಸುಲಿದು
ಕೊಳ್ಳುತ್ತೀರಿ. ಆದರೆ ಅವರು ನಿಮ್ಮಿಂದ ಏನೂ
ಕದ್ದುಕೊಳ್ಳಲಿಲ್ಲ. ನೀವು ಜನರಿಗೆ ವಿರುದ್ಧವಾಗಿ ತಿರುಗು
ತ್ತೀರಿ. ಆದರೆ ಅವರು ನಿಮಗೆ ವಿರುದ್ಧವಾಗಲಿಲ್ಲ. ಆದುದ
ರಿಂದ ನೀವು ಕದ್ದುಕೊಳ್ಳುವದನ್ನು ಬಿಟ್ಟಾಗ ಇತರರು
ನಿಮ್ಮದನ್ನು ಕದ್ದುಕೊಳ್ಳುತ್ತಾರೆ. ನೀವು ಇತರರಿಗೆ ಹಾನಿ
ಮಾಡುವದನ್ನು ನಿಲ್ಲಿಸಿದಾಗ ಇತರರು ನಿಮಗೆ ಹಾನಿ
ಮಾಡುವರು.

ಆಗ ನೀವು ಹೀಗೆ ಹೇಳುವಿರಿ:

[2] ‘‘ಯೆಹೋವನೇ, ನಮಗೆ ದಯೆತೋರು. ನಾವು
ನಿನ್ನ ಸಹಾಯಕ್ಕಾಗಿ ಎದುರುನೋಡುತ್ತಿದ್ದೇವೆ.
ಯೆಹೋವನೇ, ಪ್ರತಿ ಮುಂಜಾನೆ ನಮಗೆ ಶಕ್ತಿ
ದಯಪಾಲಿಸು, ಕಷ್ಟದಲ್ಲಿರುವಾಗ ನಮ್ಮನ್ನು
ರಕ್ಷಿಸು.
[3] ನಿನ್ನ ಬಲಯುತವಾದ ಸ್ವರವು ಜನರಿಗೆ ಹೆದರಿಕೆ
ಯನ್ನು ಉಂಟುಮಾಡುತ್ತದೆ, ಅವರು ನಿನ್ನಿಂದ ಓಡಿ
ಹೋಗುವರು. ನಿನ್ನ ಮಹೋನ್ನತೆಯು ಜನಾಂಗ
ಗಳನ್ನು ದಿಕ್ಕಾಪಾಲಾಗಿ ಮಾಡುತ್ತದೆ.’’

4ನೀವು ಯುದ್ಧದಲ್ಲಿ ದೋಚಿಕೊಂಡಿದ್ದೀರಿ. ಅವುಗಳು ನಿಮ್ಮಿಂದ ತೆಗೆಯಲ್ಪಡುವವು. ಅನೇಕಾನೇಕ ಜನರು ಬಂದು ನಿಮ್ಮ ಸಂಪತ್ತನ್ನು ದೋಚಿಕೊಳ್ಳುವರು. ಮಿಡತೆಗಳು ನಿಮ್ಮ ಬೆಳೆಯನ್ನು ತಿಂದು ನಾಶಮಾಡಿದಂತೆ ಅದಿರುವದು.

5ಯೆಹೋವನೇ ಮಹೋನ್ನತನು. ಆತನು ಬಹು ಉನ್ನತವಾದ ಸ್ಥಳದಲ್ಲಿ ವಾಸಿಸುತ್ತಾನೆ. ಆತನು ಚೀಯೋನನ್ನು ನ್ಯಾಯನೀತಿಗಳಿಂದ ತುಂಬಿಸುವನು.

6ಜೆರುಸಲೇಮೇ, ನೀನು ಐಶ್ವರ್ಯವಂತಳಾಗಿರುವೆ. ನೀನು ದೇವರ ವಿಷಯವಾದ ಜ್ಞಾನ, ತಿಳುವಳಿಕೆ ಮತ್ತು ರಕ್ಷಣೆಗಳಿಂದ ಐಶ್ವರ್ಯವಂತಳಾಗಿರುವೆ. ಯೆಹೋವನ ಮೇಲೆ ನಿನಗಿರುವ ಗೌರವವೇ ನಿನ್ನ ಭಂಡಾರವಾಗಿದೆ. ನೀನು ಹೀಗೆಯೇ ಮುಂದುವರಿಯುವೆ.

7ಆದರೆ ಕಿವಿಗೊಟ್ಟು ಕೇಳಿಸಿಕೋ, ದೇವದೂತರು ಹೊರಗೆ ಅಳುತ್ತಿದ್ದಾರೆ. ಸಮಾಧಾನದ ಸಮಾಚಾರವನ್ನು ತರುವವರು ಗಟ್ಟಿಯಾಗಿ ರೋಧಿಸುತ್ತಿದ್ದಾರೆ. 8ರಸ್ತೆಗಳು ಹಾಳಾಗಿ ಯಾರೂ ಅದರಲ್ಲಿ ನಡಿಯುವದಿಲ್ಲ. ಜನರು ತಾವು ಮಾಡಿದ ಒಪ್ಪಂದವನ್ನು ನಡಿಸುತ್ತಿಲ್ಲ. ಸಾಕ್ಷಿಗಳ ಮಾತುಗಳನ್ನು ಜನರು ಗೌರವಿಸಲು ನಿರಾಕರಿಸುತ್ತಾರೆ. ಜನರು ಒಬ್ಬರನ್ನೊಬ್ಬರು ನಂಬುವದಿಲ್ಲ. 9ದೇಶವು ಅಸ್ವಸ್ಥತೆಯಿಂದ ಸಾಯುತ್ತಿದೆ. ಲೆಬನೋನ್ ಸಾಯುತ್ತಿದೆ. ಶಾರೋನ್ ತಗ್ಗು ಒಣಗಿ ನಿರ್ಜನವಾಗಿದೆ. ಬಾಷಾನ್ ಮತ್ತು ಕರ್ಮೆಲ್ ಹಿಂದೆ ಬಹು ಅಂದವಾದ ಸಸಿಗಳನ್ನು ಬೆಳೆಯಿಸುತ್ತಿದ್ದವು. ಈಗ ಅವುಗಳು ಅಲ್ಲಿ ಬೆಳೆಯುವದಿಲ್ಲ.

10ಯೆಹೋವನು ಹೀಗನ್ನುತ್ತಾನೆ, ‘‘ಈಗ ನಾನು ಎದ್ದು ನಿಂತು ನನ್ನ ಮಹತ್ವವನ್ನು ತೋರಿಸುವೆನು. ಈಗ ನಾನು ಜನರಿಗೆ ಉನ್ನತೋನ್ನತನಾಗುವೆನು. 11ಜನರೇ, ನೀವು ಪ್ರಯೋಜನವಿಲ್ಲದ ಕಾರ್ಯಗಳನ್ನು ಮಾಡಿದಿರಿ. ಆ ಕೆಲಸಗಳು ಒಣಹುಲ್ಲಿನಂತೆಯೂ ದಂಡಿನಂತೆಯೂ ಇವೆ. ನಿನ್ನ ಆತ್ಮವು ನಿನ್ನಲ್ಲಿ ಬೆಂಕಿಯಂತಿದ್ದು ನಿನ್ನನ್ನು ಸುಡುವದು.

12ಎಲುಬುಗಳು ಬೂದಿಯಾಗುವ ತನಕ ಜನರು ಸುಡಲ್ಪಡುವರು. ಅವರು ಮುಳ್ಳುಗಳಂತೆಯೂ ಒಣಪೊದೆಗಳಂತೆಯೂ ಬೇಗನೆ ಸುಟ್ಟುಹೋಗುವರು.

13‘‘ದೂರದೇಶದಲ್ಲಿರುವವರೇ, ನಾನು ಮಾಡಿದ ಕಾರ್ಯಗಳ ವಿಷಯವಾಗಿ ಕೇಳಿರಿ. ನನ್ನ ಹತ್ತಿರವಿರುವವರೇ, ನನ್ನ ಸಾಮರ್ಥ್ಯದ ವಿಷಯವಾಗಿ ಕಲಿತುಕೊಳ್ಳಿರಿ.’’

14ಚೀಯೋನಿನಲ್ಲಿರುವ ಪಾಪಿಗಳು ಹೆದರುತ್ತಾರೆ. ಕೆಟ್ಟಕಾರ್ಯಗಳನ್ನು ಮಾಡುವವರು ಹೆದರಿಕೆಯಿಂದ ನಡುಗುವರು. ‘‘ನಮ್ಮಲ್ಲಿ ಯಾರು ನಾಶಮಾಡುವ ಈ ಬೆಂಕಿಯ ಜೊತೆ ಜೀವಿಸಬಲ್ಲರು? ನಿತ್ಯಕಾಲಕ್ಕೂ ಸುಡುವ ಈ ಬೆಂಕಿಯ ಬಳಿಯಲ್ಲಿ ಯಾರು ವಾಸಮಾಡಬಲ್ಲರು?’’ ಎಂದು ಜನರು ಹೇಳುವರು.

15ಪ್ರಾಮಾಣಿಕರಾಗಿರುವ ನೀತಿವಂತರು ಹಣಕ್ಕಾಗಿ ಇತರರಿಗೆ ಹಾನಿಮಾಡದವರಾಗಿದ್ದಾರೆ. ಅವರು ಆ ಬೆಂಕಿಯಲ್ಲಿ ವಾಸಿಸುವರು. ಅವರು ಲಂಚ ತೆಗೆದುಕೊಳ್ಳಲು ನಿರಾಕರಿಸುವರು. ಇತರರನ್ನು ಕೊಲೆಮಾಡುವ ಯೋಜನೆಯನ್ನು ಕೇಳಲು ಅವರು ಇಷ್ಟಪಡುವುದಿಲ್ಲ. ಅವರು ಕೆಟ್ಟಕಾರ್ಯಗಳ ಯೋಜನೆಗಳನ್ನು ನೋಡುವುದಿಲ್ಲ. 16ಅಂಥವರು ಉನ್ನತವಾದ ಸ್ಥಳದಲ್ಲಿ ಸುರಕ್ಷಿತವಾಗಿ ವಾಸಿಸುವರು. ಎತ್ತರವಾದ ಬಂಡೆಕಲ್ಲಿನ ಕೋಟೆಯೊಳಗೆ ಅವರು ಕಾಪಾಡಲ್ಪಡುವರು. ಅವರ ಬಳಿ ಆಹಾರ ಮತ್ತು ನೀರು ಯಾವಾಗಲೂ ಇರುವದು.

17ನಿನ್ನ ಕಣ್ಣುಗಳು ಸೌಂದರ್ಯ ಪ್ರಭಾವಗಳಿಂದ ತುಂಬಿದ ರಾಜನನ್ನು (ದೇವರನ್ನು) ನೋಡುವದು. ನೀನು ಮಹಾ ದೊಡ್ಡ ದೇಶವನ್ನು ನೋಡುವೆ.

18-19ಹಿಂದಿನ ಕಾಲದಲ್ಲಿ ನೀನು ಅನುಭವಿಸಿದ ಸಂಕಟಗಳನ್ನು ನೆನಪುಮಾಡಿಕೊಳ್ಳುವೆ. ನೀನು ಹೀಗೆ ಭಾವಿಸಿಕೊಳ್ಳುವೆ: ‘‘ಬೇರೆ ದೇಶಗಳಿಂದ ಬಂದ ಜನರೆಲ್ಲಿದ್ದಾರೆ? ನಮಗೆ ಅರ್ಥವಾಗದಂಥ ಬಾಷೆಯಲ್ಲಿ ಅವರು ಮಾತಾಡುತ್ತಿದ್ದರು. ಪರದೇಶದ ಅಧಿಕಾರಿಗಳು ತೆರಿಗೆ ಎತ್ತುವವರು ಎಲ್ಲಿ? ನಮ್ಮ ಕೋಟೆಗಳನ್ನು, ಬುರುಜುಗಳನ್ನು ಲೆಕ್ಕಿಸಲು ಬಂದ ಗೂಢಚಾರರೆಲ್ಲಿ? ಅವರೆಲ್ಲಾ ಹೋಗಿಬಿಟ್ಟರು.’’

## ದೇವರು ಜೆರುಸಲೇಮನ್ನು ರಕ್ಷಿಸುತ್ತಾನೆ

20ನಮ್ಮ ಹಬ್ಬಗಳನ್ನು ಆಚರಿಸುವ ನಗರವಾದ ಚೀಯೋನನ್ನು ನೋಡಿರಿ. ಮನೋಹರವಾದ ವಿಶ್ರಾಂತಿಸ್ಥಳವಾದ ಜೆರುಸಲೇಮನ್ನು ನೋಡಿರಿ. ಜೆರುಸಲೇಮು ಎಂದಿಗೂ ಕದಲದ ಗುಡಾರವಾಗಿದೆ. ಆಕೆಯನ್ನು ಭದ್ರವಾಗಿ ಹಿಡಿದುಕೊಂಡಿರುವ ಗೂಟಗಳು ಎಂದಿಗೂ ಕೀಳಲ್ಪಡುವದಿಲ್ಲ. ಆಕೆಯ ಹಗ್ಗಗಳು ಎಂದಿಗೂ ತುಂಡಾಗುವದಿಲ್ಲ. 21-23ಯಾಕೆಂದರೆ ಬಲಿಷ್ಠನಾದ ಯೆಹೋವನು ಅಲ್ಲಿದ್ದಾನೆ. ಆ ದೇಶವು ತೊರೆಗಳೂ ಅಗಲವಾಗಿ ಹರಿಯುವ ನದಿಗಳೂ ಇರುವ ದೇಶವಾಗಿದೆ. ಆದರೆ ಆ ನದಿಯಲ್ಲಿ ವೈರಿಯ ದೋಣಿಯಾಗಲೀ, ಹಡಗುಗಳಾಗಲೀ ಇರುವದಿಲ್ಲ. ಆ ಹಡಗುಗಳಲ್ಲಿ ಕೆಲಸ ಮಾಡುವವರೇ, ನೀವು ಅದರ ಹಗ್ಗಗಳಲ್ಲಿ ಕೆಲಸಮಾಡುವದನ್ನು ಬಿಟ್ಟುಬಿಡಿರಿ. ಹಡಗಿನ ಸ್ತಂಭವನ್ನು ನೀವು ಬಲಪಡಿಸಲಾರಿರಿ. ಹಡಗಿನ ಹಾಯಿಗಳನ್ನು ನಿಮ್ಮಿಂದ ತೆರೆಯಲು ಆಗುವದಿಲ್ಲ. ಯಾಕೆಂದರೆ ದೇವರೇ ನಮ್ಮ ನ್ಯಾಯಾಧೀಶನು. ಆತನು ಧರ್ಮಶಾಸ್ತ್ರವನ್ನು ಸಿದ್ಧಪಡಿಸಿದಾತನು.

ಯೆಹೋವನೇ ನಮ್ಮ ಅರಸನು. ಆತನೇ ನಮ್ಮನ್ನು ರಕ್ಷಿಸು
ವನು, ನಮಗೆ ಸಂಪತ್ತನ್ನು ದಯಪಾಲಿಸುವನು. ಕೈಕಾಲು
ಊನವಾದವರೂ ಸಹ ಯುದ್ಧದಲ್ಲಿ ಸಂಪತ್ತನ್ನು
ಗಳಿಸುವರು. 24ಅಲ್ಲಿ ವಾಸಿಸುವವರಲ್ಲಿ ಯಾರೂ ‘‘ನನಗೆ
ಸೌಖ್ಯವಿಲ್ಲ’’ ಎಂದು ಹೇಳುವುದಿಲ್ಲ. ಅಲ್ಲಿ ವಾಸಿಸುವವ
ರೆಲ್ಲಾ ತಮ್ಮ ಪಾಪಗಳಿಗೆ ಕ್ಷಮೆಹೊಂದಿದವರಾಗಿದ್ದಾರೆ.

## ದೇವರು ತನ್ನ ಶತ್ರುಗಳನ್ನು ಶಿಕ್ಷಿಸುತ್ತಾನೆ

34 ಎಲ್ಲಾ ಜನಾಂಗಗಳೇ, ಹತ್ತಿರ ಬಂದು ಕೇಳಿರಿ.
ನೀವೆಲ್ಲರೂ ಸ್ಪಷ್ಟವಾಗಿ ಕೇಳಿಸಿಕೊಳ್ಳಬೇಕು.
ಭೂಮಿಯೂ ಭೂಮಿಯ ಮೇಲೆ ಜೀವಿಸುತ್ತಿರುವ ಜನ
ರೆಲ್ಲರೂ ಅವುಗಳಿಗೆ ಕಿವಿಗೊಡಬೇಕು. 2ಯೆಹೋವನು
ಎಲ್ಲಾ ದೇಶಗಳವರ ಮೇಲೆಯೂ ಅವುಗಳ ಸೈನ್ಯದ
ಮೇಲೆಯೂ ಕೋಪಗೊಂಡಿದ್ದಾನೆ. ಯೆಹೋವನು
ಅವರೆಲ್ಲರನ್ನು ನಾಶಮಾಡುತ್ತಾನೆ. ಅವರೆಲ್ಲರೂ ಕೊಲ್ಲ
ಲ್ಪಡುವಂತೆ ಮಾಡುತ್ತಾನೆ. 3ಅವರ ಹೆಣಗಳು ಹೊರಗೆ
ಬಿಸಾಡಲ್ಪಡುವವು. ದುರ್ವಾಸನೆಯು ಹರಡುವದು,
ರಕ್ತವು ಪರ್ವತದಿಂದ ಹರಿಯುವುದು. 4ಆಕಾಶವು
ಸುರುಳಿಯಂತೆ ಮುಚ್ಚಿಹೋಗುವದು. ನಕ್ಷತ್ರಗಳು
ಅಂಜೂರದ ಒಣಗಿದ ಎಲೆಗಳಂತೆ ಉದುರಿಬೀಳುವವು.
ಆಕಾಶದಲ್ಲಿರುವ ಎಲ್ಲಾ ನಕ್ಷತ್ರಗಳು ಕರಗಿಹೋಗು ವವು.
5‘‘ಆಕಾಶದಲ್ಲಿರುವ ನನ್ನ ಖಡ್ಗವು ರಕ್ತದಲ್ಲಿ ಮುಳುಗಿ
ದಾಗ ಇವೆಲ್ಲಾ ಸಂಭವಿಸುವದು’’ ಎಂದು ಯೆಹೋವನು
ಅನ್ನುತ್ತಾನೆ.

ಯೆಹೋವನ ಕತ್ತಿಯು ಎದೋಮನ್ನು ತುಂಡರಿಸು
ವುದು. ಆತನು ಆ ಜನರನ್ನು ದೋಷಿಗಳೆಂದು ನ್ಯಾಯ
ತೀರಿಸಿದ್ದಾನೆ. ಆದುದರಿಂದ ಅವರು ಸಾಯಬೇಕು.
6ಆತನು ಬೊಚ್ರದಲ್ಲಿ ಮತ್ತು ಎದೋಮಿನಲ್ಲಿ ಕೊಲ್ಲುವ
ಸಮಯವನ್ನು ನಿರ್ಧರಿಸಿರುತ್ತಾನೆ. 7ಟಗರುಗಳು, ದನ
ಕುರಿಗಳು ಮತ್ತು ಬಲವಾದ ಹೋರಿಗಳು ಕೊಲ್ಲಲ್ಪಡು
ವವು. ಇದು ನೆರವೇರುವುದು, ಯಾಕೆಂದರೆ ದೇವರು
ದಂಡನೆಗಾಗಿ ಸಮಯವನ್ನು ಆರಿಸಿಕೊಂಡಿದ್ದಾನೆ.
8 ಜನರು ಚೀಯೋನಿನಲ್ಲಿ ಮಾಡಿದ ಕಾರ್ಯಗಳಿಗೆ
ದಂಡನೆಯನ್ನು ಅನುಭವಿಸುವುದಕ್ಕಾಗಿ ಆತನು ಒಂದು
ವರ್ಷವನ್ನು ಆರಿಸಿಕೊಂಡಿದ್ದಾನೆ. 9ಎದೋಮಿನ ನದಿ
ಗಳು ಕರಗಿರುವ ರಾಳದಂತಿರುವದು. ಅದರ ನೆಲವು
ಸುಡುವ ಗಂಧಕದಂತಿರುವದು. 10ಬೆಂಕಿಯು ಹಗಲು
ರಾತ್ರಿ ಉರಿಯುವದು. ಯಾರಿಗೂ ಅದನ್ನು ನಂದಿಸಲು
ಸಾಧ್ಯವಿಲ್ಲ. ಎದೋಮಿನಿಂದ ಹೊಗೆಯು ಯಾವಾ
ಗಲೂ ಮೇಲಕ್ಕೇರುವದು. ಆ ದೇಶವು ನಿತ್ಯಕಾಲಕ್ಕೂ
ನಾಶವಾಗಿ ಹೋಗುವದು. ಆ ದೇಶದೊಳಗೆ ಯಾರೂ
ಪ್ರಯಾಣಮಾಡುವದಿಲ್ಲ. 11ಪಕ್ಷಿಗಳು ಮತ್ತು ಚಿಕ್ಕಪ್ರಾಣಿ
ಗಳೂ ಅದರಲ್ಲಿ ವಾಸಿಸುವವು. ಗೂಬೆಗಳೂ ಕಾಗೆಗಳೂ
ಅಲ್ಲಿ ವಾಸಿಸುವವು. ಅದು ‘ಬೆಂಗಾಡಿನ ಮರುಭೂಮಿ’
ಎಂದು ಕರೆಯಲ್ಪಡುವದು. 12ಅದರ ನಾಯಕರೂ
ಸ್ವತಂತ್ರರೂ* ಇಲ್ಲವಾಗುವರು; ಯಾಕೆಂದರೆ ಅವರಿಗೆ
ಆಳಲಿಕ್ಕೆ ಅಲ್ಲಿ ಏನೂ ಇರದು.

13ಮುಳ್ಳುಗಿಡಗಳು ಅಲ್ಲಿಯ ಸುಂದರವಾದ ಬಂಗಲೆ
ಗಳಲ್ಲಿ ಬೆಳೆಯುವವು. ಕಾಡುನಾಯಿಗಳೂ ಗೂಬೆಗಳೂ
ಆ ಮನೆಗಳಲ್ಲಿ ವಾಸಿಸುವವು. ಕಾಡುಪ್ರಾಣಿಗಳು ಅದನ್ನು
ತಮ್ಮ ಮನೆಯನ್ನಾಗಿ ಮಾಡಿಕೊಳ್ಳುವವು. ಅಲ್ಲಿ ಬೆಳೆ
ಯುವ ಎತ್ತರವಾದ ಹುಲ್ಲುಗಳಲ್ಲಿ ದೊಡ್ಡ ಪಕ್ಷಿಗಳು ವಾಸ
ಮಾಡುವವು. 14ಕಾಡುಬೆಕ್ಕುಗಳು ಮತ್ತು ಕತ್ತೆಕಿರುಬಗಳು
ಅಲ್ಲಿ ವಾಸಮಾಡುವವು. ಕಾಡಿನ ಹೋತಗಳು ತಮ್ಮ
ಸ್ನೇಹಿತರನ್ನು ಕರೆಯುವವು. ರಾತ್ರಿಪ್ರಾಣಿಗಳು ಅಲ್ಲಿ ವಿಶ್ರ
ಮಿಸಿಕೊಳ್ಳುವವು. 15ಅಲ್ಲಿ ಹಾವುಗಳೂ ತಮ್ಮ ಮನೆಗ
ಳನ್ನು ಮಾಡಿಕೊಳ್ಳುವವು. ಅಲ್ಲಿಯೇ ಮೊಟ್ಟೆಗಳ
ನ್ನಿಡುವವು. ಮೊಟ್ಟೆಗಳು ಒಡೆದಾಗ ಸಣ್ಣ ಹಾವು ಮರಿಗಳು
ಆ ಕತ್ತ ಲೆಯ ಜಾಗದಲ್ಲಿ ಹರಿದಾಡುವವು. ಹೆಂಗಸರು
ಪರಸ್ಪರ ಸಂಧಿಸಿ ಮಾತನಾಡುವಂತೆ ಸತ್ತಪ್ರಾಣಿಗಳ
ಮಾಂಸವನ್ನು ತಿನ್ನುವ ಪಕ್ಷಿಗಳು ಒಟ್ಟಾಗಿ ಸೇರುವವು.

16ಯೆಹೋವನ ಸುರುಳಿಯನ್ನು ನೋಡಿರಿ. ಅಲ್ಲಿ
ಬರೆದಿರುವದನ್ನು ಓದಿರಿ. ಅದರಲ್ಲಿ ಯಾವದೂ ಕಳೆದು
ಹೋಗಿಲ್ಲ. ಆ ಪ್ರಾಣಿಗಳು ಒಟ್ಟಾಗಿ ವಾಸಿಸುವವೆಂದು ಆ
ಸುರುಳಿಯಲ್ಲಿ ಬರೆದದೆ. ಅವುಗಳನ್ನು ಒಟ್ಟಾಗಿ ಸೇರಿಸು
ತ್ತೇನೆಂದು ದೇವರು ಹೇಳಿದ್ದಾನೆ. ಆದುದರಿಂದ
ಯೆಹೋವನ ಆತ್ಮವು ಅವುಗಳನ್ನು ಒಟ್ಟಾಗಿ ಸೇರಿಸು
ವದು. 17ಅವುಗಳಿಗೆ ಮಾಡತಕ್ಕದ್ದನ್ನು ದೇವರು ತೀರ್ಮಾ
ನಿಸಿದ್ದಾನೆ. ಆತನು ಅವುಗಳಿಗೆ ಒಂದು ಸ್ಥಳವನ್ನು ಆರಿಸಿ
ದ್ದಾನೆ. ಆತನು ಮೇರೆಯನ್ನು ನಿರ್ಮಿಸಿ ಅವುಗಳ ದೇಶ
ವನ್ನು ತೋರಿಸಿದ್ದಾನೆ. ಹೀಗೆ ಆ ಪ್ರಾಣಿಗಳು ದೇಶವನ್ನು
ನಿತ್ಯಕಾಲಕ್ಕೂ ತಮ್ಮದಾಗಿ ಮಾಡಿಕೊಳ್ಳುವವು. ವರುಷ
ವರುಷವೂ ಅವುಗಳು ಅಲ್ಲಿಯೇ ವಾಸಮಾಡುವವು.

## ದೇವರು ತನ್ನ ಜನರನ್ನು ಸಂತೈಸುವನು

35 ಮರುಭೂಮಿಯು ಬಹಳವಾಗಿ ಸಂತೋಷಿಸು
ವದು. ಅದು ಹರ್ಷಿಸುತ್ತಾ ಪುಷ್ಪದಂತೆ ಫಲಿಸು
ವುದು. 2ಮರುಭೂಮಿಯು ಹರ್ಷದಿಂದ ಅರಳಿದ
ಹೂಗಳಿಂದ ತುಂಬಿಹೋಗುವುದು. ಸಂತೋಷದಿಂದ
ಕುಣಿದಾಡುವದೋ ಎಂಬಂತೆ ತೋರುವದು.

---

**ಸ್ವತಂತ್ರರು** ಪಟ್ಟಣದ ಅಥವಾ ದೇಶದ ಮುಖ್ಯ ಪ್ರಜೆಗಳು. ಇವರು ಒಳ್ಳೆಯ ಕುಟುಂಬಗಳಿಂದ ಬಂದವರಾಗಿರುವರು ಮತ್ತು ಹಿಂದೆಂದೂ ಗುಲಾಮರಾಗಿರಲಿಲ್ಲ.

ಲೆಬನೋನಿನ ಅರಣ್ಯದಂತೆಯೂ ಕರ್ಮೆಲ್ ಬೆಟ್ಟ
ದಂತೆಯೂ ಶಾರೋನಿನ ತಗ್ಗಿನಂತೆಯೂ ಮನೋಹರ
ವಾಗಿರುವದು. ಎಲ್ಲಾ ಜನರೂ ದೇವರ ಮಹಿಮೆಯನ್ನು
ಕಾಣುವರು. ಅವರು ನಮ್ಮ ದೇವರ ಪ್ರಭಾವವನ್ನು
ಕಾಣುವರು.

3ಬಲಹೀನವಾದ ಕೈಗಳನ್ನು ಬಲಗೊಳಿಸಿರಿ, ನಡುಗುವ
ಮೊಣಕಾಲುಗಳನ್ನು ನೆಟ್ಟಗೆಮಾಡಿರಿ. 4ಜನರು ಭಯ
ದಿಂದ ಗಲಿಬಿಲಿಗೊಂಡಿದ್ದಾರೆ. ಅವರಿಗೆ ಹೀಗೆ ಹೇಳು,
''ಧೈರ್ಯಗೊಳ್ಳಿರಿ, ಭಯಪಡಬೇಡಿ.'' ಇಗೋ, ನಿಮ್ಮ
ದೇವರು ಬಂದು ನಿಮ್ಮ ವೈರಿಗಳನ್ನು ಶಿಕ್ಷಿಸುವನು. ಆತನು
ಬಂದು ನಿಮಗೆ ಪ್ರತಿಫಲವನ್ನು ಕೊಡುವನು.
ಯೆಹೋವನು ನಿಮ್ಮನ್ನು ಕಾಪಾಡುತ್ತಾನೆ. 5ಆಗ ಕುರುಡ
ರಿಗೆ ದೃಷ್ಟಿ ಬರುವದು. ಅವರ ಕಣ್ಣುಗಳು ತೆರೆಯಲ್ಪ
ಡುವವು. ಆಗ ಕಿವುಡರು ಕೇಳಿಸಿಕೊಳ್ಳುವರು. ಅವರ
ಕಿವಿಗಳು ತೆರೆಯಲ್ಪಡುವವು. 6ಕುಂಟರು ಜಿಂಕೆಯಂತೆ
ಜಿಗಿದಾಡುವರು. ಮಾತನಾಡಲಸಾಧ್ಯವಾದ ಜನರು ಈಗ
ಹರ್ಷಗಾನವನ್ನು ಹಾಡುವರು. ಯಾವಾಗ ಮರು
ಭೂಮಿಯಲ್ಲಿ ತೊರೆಯ ನೀರು ಹರಿಯುವದೋ ಆಗ
ಇವೆಲ್ಲಾ ಜರಗುವವು. ಒಣಭೂಮಿಯಲ್ಲಿ ಒರತೆಯ
ನೀರು ಹರಿಯುವದು. 7ಈಗ ಜನರು ಬಿಸುಲ್ಗುದುರೆ
ಯನ್ನು ನೋಡಿ ನೀರು ಎಂದು ಭಾವಿಸುವರು. ಆದರೆ
ಆಗ ನೀರಿನ ಕೊಳಗಳೇ ಇರುವವು. ಬೆಂಗಾಡಿನಲ್ಲಿ
ಬಾವಿಗಳಿರುವವು. ನೆಲದೊಳಗಿಂದ ನೀರು ಉಕ್ಕುವುದು.
ಒಂದು ಕಾಲದಲ್ಲಿ ಕಾಡುಪ್ರಾಣಿಗಳು ವಾಸವಾಗಿದ್ದ ಸ್ಥಳ
ದಲ್ಲಿ ಎತ್ತರವಾದ ನೀರವಂಜಿಗಳು ಬೆಳೆಯುವವು.

8ಆ ಸಮಯದಲ್ಲಿ ಅಲ್ಲಿ ಮಾರ್ಗವಿರುವದು. ಆ ಹೆದ್ದಾ
ರಿಯು ''ಪರಿಶುದ್ಧ'' ಮಾರ್ಗವೆಂದು ಕರೆಯಲ್ಪಡು
ವದು. ದುಷ್ಟಜನರಿಗೆ ಆ ಮಾರ್ಗದಲ್ಲಿ ನಡೆಯಲು ಅನು
ಮತಿ ಇರುವದಿಲ್ಲ. ಮೂರ್ಖರು ಆ ಮಾರ್ಗದಲ್ಲಿ ನಡೆ
ಯರು. ಆ ಮಾರ್ಗದಲ್ಲಿ ಒಳ್ಳೆಯ ಜನರು ಮಾತ್ರ ನಡೆ
ಯುವರು. 9ಆ ಮಾರ್ಗದಲ್ಲಿ ಅಪಾಯವಿರುವದಿಲ್ಲ. ಜನ
ರಿಗೆ ಹಾನಿಮಾಡಲು ಸಿಂಹಗಳಾಗಲೀ ಕ್ರೂರ ಜಂತುಗ
ಳಾಗಲೀ ಆ ಮಾರ್ಗದಲ್ಲಿರುವದಿಲ್ಲ. ದೇವರು ರಕ್ಷಿಸುವ
ಜನರಿಗೆ ಮಾತ್ರವೇ ಆ ಮಾರ್ಗವಿರುವುದು.

10ದೇವರು ತನ್ನ ಜನರನ್ನು ಸ್ವತಂತ್ರರನ್ನಾಗಿ ಮಾಡು
ತ್ತಾನೆ. ಆ ಜನರು ಆತನ ಬಳಿಗೆ ಹಿಂದಿರುಗಿ ಬರುವರು.
ಚೀಯೋನಿಗೆ ಜನರು ಬರುವಾಗ ಅವರು ಸಂತೋಷ
ಭರಿತರಾಗುವರು. ಅವರು ನಿತ್ಯವೂ ಸಂತೋಷವಾಗಿರು
ವರು. ತಲೆಯ ಮೇಲಿನ ಕಿರೀಟದಂತೆ ಅವರ ಸಂತೋಷ
ವಿರುವದು. ಅವರಲ್ಲಿ ಹರ್ಷವೂ ಸಂತಸವೂ ಸಂಪೂರ್ಣ
ವಾಗಿ ತುಂಬಿರುವವು. ದುಃಖವೂ ಚಿಂತೆಯೂ ಬಹು
ದೂರವಾಗಿರುವವು.

## ಅಶ್ಶೂರದವರು ಯೆಹೂದದ ಪ್ರವೇಶ ಮಾಡುವರು

36 ಅರಸನಾದ ಹಿಜ್ಕೀಯನ ಆಳ್ವಿಕೆಯ ಹದಿ
ನಾಲ್ಕನೇ ವರುಷದಲ್ಲಿ ಅಶ್ಶೂರದ ಅರಸನಾದ
ಸನ್ಹೇರೀಬನು ಯೆಹೂದದಲ್ಲಿ ಕೋಟೆಗಳನ್ನು
ಹೊಂದಿದ್ದ ಎಲ್ಲಾ ಪಟ್ಟಣಗಳ ವಿರುದ್ಧ ದಂಡೆತ್ತಿ ಬಂದು
ಅವುಗಳನ್ನೆಲ್ಲ ಸೋಲಿಸಿದನು. 2ಅಶ್ಶೂರದ ರಾಜನಾದ
ಸನ್ಹೇರೀಬನು ತನ್ನ ದಳಪತಿಯನ್ನು ಒಂದು ದೊಡ್ಡ ಸೈನ್ಯ
ದೊಡನೆ ಜೆರುಸಲೇಮಿನಲ್ಲಿದ್ದ ಅರಸನಾದ ಹಿಜ್ಕೀಯನ
ಬಳಿಗೆ ಕಳುಹಿಸಿದನು. ದಳಪತಿ ತನ್ನ ಸೈನ್ಯದೊಡನೆ
ಲಾಕೀಷಿನಿಂದ ಜೆರುಸಲೇಮಿಗೆ ಹೊರಟನು. ಅವರು
ಮೇಲಿನ ಕೊಳದ ಬಳಿಯಲ್ಲಿರುವ ನೀರು ಕಾಲುವೆಯ
ಬಳಿ ನಿಂತರು. ಮೇಲಿನ ಕೊಳವು ಅಗಸರ ಬಯಲಿಗೆ
ಹೋಗುವ ಮಾರ್ಗದಲ್ಲಿದೆ.

3ಜೆರುಸಲೇಮಿನಿಂದ ಮೂರು ಮಂದಿ ದಳಪತಿ
ಯೊಂದಿಗೆ ಮಾತನಾಡಲು ಹೊರಟರು. ಅವರು
ಯಾರೆಂದರೆ ಹಿಲ್ಕೀಯನ ಮಗನಾದ ಎಲ್ಯಾಕೀಮ್
ಆಸಾಫನ ಮಗನಾದ ಯೋವ ಮತ್ತು ಶೆಬ್ನ,
ಎಲ್ಯಾಕೀಮನು ಅರಮನೆಯ ಆಡಳಿತಗಾರನಾಗಿದ್ದನು;
ಯೋವನು ದಾಖಲೆಕಾರನಾಗಿದ್ದನು; ಶೆಬ್ನ ಅರಮನೆಯ
ಕಾರ್ಯದರ್ಶಿಯಾಗಿದ್ದನು.

4ದಳಪತಿಯು ಅವರಿಗೆ, ''ಮಹಾಅರಸನಾದ ಅಶ್ಶೂ
ರದ ಅರಸನು ಹಿಜ್ಕೀಯನಿಗೆ ಹೇಳುವದನ್ನು ನೀವು
ಹೋಗಿ ಅವನಿಗೆ ತಿಳಿಸಿರಿ. ಅವನು ಹೇಳುವದೇನೆಂದರೆ:

''ನೀನು ಯಾವದರ ಮೇಲೆ ಭರವಸವಿಟ್ಟಿರುವೆ?
5ನೀನು ನಿನ್ನ ಶಕ್ತಿಯಲ್ಲಿಯೂ ಯುದ್ಧದ ತಂತ್ರೋ
ಪಾಯಗಳ ಮೇಲೆಯೂ ಭರವಸವಿಟ್ಟಿದ್ದರೆ ಅವು
ಕೇವಲ ನಿಷ್ಪ್ರಯೋಜಕವಾಗಿವೆ; ಕೇವಲ ಬಡಾಯಿ
ಕೊಚ್ಚಿಕೊಳ್ಳುತ್ತಿರುವೆ? ನೀನು ನನ್ನ ವಿರುದ್ಧ ದಂಗೆ
ಏಳಬೇಕಾದರೆ ಯಾರ ಮೇಲೆ ಭರವಸವಿಟ್ಟಿರುವೆ?
6ಈಜಿಪ್ಟು ನಿನಗೆ ಸಹಾಯ ಮಾಡುವುದೆಂದು ನಂಬಿ
ರುವಿಯಾ? ಈಜಿಪ್ಟು ಒಂದು ಮುರಿದ ದಂಟು.
ಅದರ ಮೇಲೆ ನೀನು ಭಾರಹಾಕಿದರೆ ಅದು ನಿನ್ನ
ಅಂಗೈಯಲ್ಲಿ ತೂತುಮಾಡುವುದು. ಈಜಿಪ್ಟಿನ
ರಾಜನಾದ ಫರೋಹನ ಸಹಾಯಕ್ಕಾಗಿ ಆಶ್ರಯಿಸಿ
ಕೊಂಡ ಯಾವ ಜನರೂ ಅವನಲ್ಲಿ ಭರವಸೆ ಇಡ
ಲಾಗದು.

7ಒಂದು ವೇಳೆ ನೀವು, ''ನಾವು ನಮ್ಮ ದೇವರಾದ
ಯೆಹೋವನ ಮೇಲೆ ಭರವಸವಿಟ್ಟಿದ್ದೇವೆ'' ಎಂದು
ಹೇಳಬಹುದು. ಆದರೆ ಜನರು ಯೆಹೋವನನ್ನು
ಆರಾಧಿಸುತ್ತಿದ್ದ ವೇದಿಕೆಗಳನ್ನೂ ಎತ್ತರವಾದ ಸ್ಥಳ
ಗಳನ್ನೂ ಹಿಜ್ಕೀಯನು ನಾಶಮಾಡಿದ್ದಾನೆ. ಅಲ್ಲದೆ,

ಯೆಹೂದ ಮತ್ತು ಜೆರುಸಲೇಮಿನಲ್ಲಿರುವ ಜನ
ರಿಗೆ, ‘‘ನೀವು ಜೆರುಸಲೇಮಿನಲ್ಲಿರುವ ಯಜ್ಞವೇದಿ
ಕೆಯಲ್ಲಿಯೇ ಆರಾಧಿಸಬೇಕು’’ ಎಂದು ಆಜ್ಞಾಪಿಸಿ
ರುವುದು ನನಗೆ ಗೊತ್ತಿದೆ.
8ನೀವು ಒಡೆಯನಾದ ಅರಸನೊಂದಿಗೆ ಯುದ್ಧ
ಮಾಡುವ ಆಲೋಚನೆಯನ್ನು ಇನ್ನೂ ಹೊಂದಿ
ದ್ದರೆ, ನಿಮ್ಮೊಂದಿಗೆ ಈ ಒಪ್ಪಂದವನ್ನು ಮಾಡಿ
ಕೊಳ್ಳುವೆನು. ಯುದ್ಧಕ್ಕೆ ಬರಲು ನಿಮ್ಮಲ್ಲಿ ಸಾಕಷ್ಟು
ಸೈನಿಕರಿದ್ದಾರೆ. ನಾನು ನಿಮಗೆ ಎರಡುಸಾವಿರ
ಕುದುರೆಗಳನ್ನು ಕೊಡುವುದಾಗಿ ವಾಗ್ದಾನ ಮಾಡು
ತ್ತೇನೆ. 9ಹೀಗಿದ್ದರೂ ನನ್ನ ಒಡೆಯನ ಸೈನ್ಯಾಧಿಕಾರಿ
ಗಳಲ್ಲಿ ಕನಿಷ್ಠನಾದವನನ್ನು ಸೋಲಿಸಲು ನಿಮ್ಮಿಂ
ದಾಗದು. ಆದುದರಿಂದ ನೀವು ಈಜಿಪ್ಟಿನವರ ಅಶ್ವ
ದಳದ ಮೇಲೆ ಯಾಕೆ ಭರವಸವಿಡುತ್ತೀರಿ?
10ಈಗ ನಾನು ಯೆಹೋವನ ಸಹಾಯವಿಲ್ಲದೆ ಈ
ದೇಶವನ್ನು ನಾಶಮಾಡಲು ಬಂದೆನೆಂದು ನೆನ
ಸುತ್ತೀರೋ? ‘‘ಎದ್ದು ಹೋಗಿ ಈ ದೇಶದ ವಿರುದ್ಧ
ಯುದ್ಧ ನಡೆಸಿ ಅದನ್ನು ಸಂಪೂರ್ಣವಾಗಿ ನಾಶ
ಮಾಡು’’ ಎಂದು ಯೆಹೋವನು ನನಗೆ
ಹೇಳಿದ್ದಾನೆ.

11ಆಗ ಎಲ್ಯಾಕೀಮ್, ಶೆಬ್ನ ಮತ್ತು ಯೋವ ಆ ದಳ
ಪತಿಗೆ, ‘‘ದಯಮಾಡಿ ನಮ್ಮೊಂದಿಗೆ ಅರಮೇಯಿಕ್
ಭಾಷೆಯಲ್ಲಿ ಮಾತನಾಡು. ಆ ಭಾಷೆಯು ನಮಗೆ
ಗೊತ್ತು. ಯೆಹೂದದ ಭಾಷೆಯಲ್ಲಿ ನಮ್ಮೊಂದಿಗೆ ಮಾತ
ನಾಡಬೇಡ. ನೀವು ನಮ್ಮ ಭಾಷೆಯಲ್ಲಿ ಮಾತನಾಡಿದರೆ
ಗೋಡೆಯ ಮೇಲಿರುವ ನಮ್ಮ ಜನರು ತಿಳಿದು
ಕೊಳ್ಳುವರು’’ ಎಂದು ಹೇಳಿದರು.
12ದಳಪತಿಯು ಅದಕ್ಕುತ್ತರವಾಗಿ, ‘‘ನನ್ನ ಒಡೆಯನು
ನಿಮ್ಮೊಂದಿಗೂ ನಿಮ್ಮ ಅರಸನೊಂದಿಗೂ ಮಾತ್ರ ಮಾತ
ನಾಡಲು ಕಳುಹಿಸಲಿಲ್ಲ. ನನ್ನ ಒಡೆಯನು ಕೋಟೆ
ಗೋಡೆಯ ಮೇಲೆ ಕುಳಿತಿರುವ ಜನರೊಂದಿಗೆ ಮಾತಾ
ಡಲು ಕಳುಹಿಸಿದ್ದಾನೆ. ಆ ಜನರಿಗೆ ಊಟಕ್ಕೆ ಆಹಾರ, ಕುಡಿ
ಯಲು ನೀರು ದೊರಕುವದಿಲ್ಲ. ಅವರು ನಿಮ್ಮ ಹಾಗೆ
ತಮ್ಮ ಸ್ವಂತ ಮಲವನ್ನು ತಿಂದು ಮೂತ್ರವನ್ನು ಕುಡಿಯು
ವರು’’ ಎಂದು ಹೇಳಿದನು.
13ಬಳಿಕ ದಳಪತಿಯು ಯೆಹೂದ್ಯ ಭಾಷೆಯಲ್ಲಿ ಗಟ್ಟಿ
ಯಾಗಿ , ‘‘ಮಹಾ ಅರಸನಾಗಿರುವ ಅಶ್ಶೂರದ ರಾಜನ
ಮಾತುಗಳನ್ನು ಕೇಳಿರಿ.

14ಹಿಜ್ಕೀಯನು ನಿಮ್ಮನ್ನು ಮೋಸಪಡಿಸದಂತೆ
ನೋಡಿಕೊಳ್ಳಿರಿ. ಅವನು ನಮ್ಮ ಸಾಮರ್ಥ್ಯದಿಂದ
ನಿಮ್ಮನ್ನು ರಕ್ಷಿಸಲಾರನು. 15‘‘ಯೆಹೋವನನ್ನು
ನಂಬಿರಿ. ಆತನು ನಮ್ಮನ್ನು ರಕ್ಷಿಸುವನು. ಆತನು
ಅಶ್ಶೂರದ ಅರಸನು ನಮ್ಮ ಪಟ್ಟಣವನ್ನು ಸೋಲಿ
ಸಲು ಬಿಡುವದಿಲ್ಲ’ ಎಂದು ಹಿಜ್ಕೀಯನು ಹೇಳಿದರೆ
ಅವನನ್ನು ನಂಬಬೇಡಿ.
16ಹಿಜ್ಕೀಯನ ಮಾತುಗಳನ್ನು ಕೇಳಬೇಡಿ.
ಅಶ್ಶೂರದ ಅರಸನ ಮಾತುಗಳಿಗೆ ಕಿವಿಗೊಡಿರಿ.
ಅವನು ಹೇಳುವದೇನೆಂದರೆ: ‘‘ನೀವು ನನ್ನೊಡನೆ
ಒಪ್ಪಂದ ಮಾಡಿಕೊಂಡು ನಿಮ್ಮ ನಗರದಿಂದ
ಹೊರಗೆ ಬಂದು ನನ್ನನ್ನು ಸಂಧಿಸಬೇಕು. ಆಗ ನೀವೆ
ಲ್ಲರೂ ನಿಮ್ಮ ಮನೆಗಳಿಗೆ ಹೋಗಬಹುದು; ನಿಮ್ಮ
ಸ್ವಂತ ದ್ರಾಕ್ಷಿತೋಟದ ದ್ರಾಕ್ಷಿಹಣ್ಣುಗಳನ್ನು ತಿನ್ನ
ಬಹುದು; ಅಂಜೂರದ ಮರದ ಹಣ್ಣನ್ನು ತಿನ್ನ
ಬಹುದು. ನೀವೆಲ್ಲರೂ ನಿಮ್ಮ ಬಾವಿಯ ನೀರನ್ನು
ಕುಡಿಯಬಹುದು. 17ಹೀಗೆ ನೀವು ಸೇವಿಸುತ್ತಾ
ಇದ್ದರೆ ನಾನು ಬಂದು ನಿಮ್ಮಂತಹ ದೇಶಕ್ಕೆ ನಿಮ್ಮನ್ನು
ಕರೆದೊಯ್ಯುವೆನು. ಆ ಹೊಸ ದೇಶದಲ್ಲಿ ನೀವು
ಒಳ್ಳೆಯ ಧಾನ್ಯವನ್ನು ಮತ್ತು ಹೊಸ ದ್ರಾಕ್ಷಾರಸ
ವನ್ನು, ರೊಟ್ಟಿಯನ್ನು ಮತ್ತು ದ್ರಾಕ್ಷಾತೋಟ
ಗಳನ್ನು ಹೊಂದುವಿರಿ.’’
18ಹಿಜ್ಕೀಯನು ತನ್ನ ಮಾತುಗಳಿಂದ ನಿಮ್ಮನ್ನು
ಮೋಸಗೊಳಿಸದಂತೆ ನೋಡಿಕೊಳ್ಳಿರಿ. ಅವನು,
‘ಯೆಹೋವನು ನಮ್ಮನ್ನು ರಕ್ಷಿಸುತ್ತಾನೆ’ ಎಂದು
ಹೇಳುತ್ತಾನೆ. ನಾನು ನಿಮಗೆ ಒಂದು ಪ್ರಶ್ನೆ ಕೇಳು
ತ್ತೇನೆ. ಬೇರೆ ದೇಶದ ದೇವರುಗಳು ಅವರ ದೇಶ
ವನ್ನು ಅಶ್ಶೂರದ ರಾಜನಿಂದ ಕಾಪಾಡಲು ಶಕ್ತ
ರಾದರೋ? ಇಲ್ಲ! 19ಹಮಾತಿನ, ಅರ್ಪಾದಿನ
ದೇವರೆಲ್ಲಿ? ಅವರು ಸೋತು ಹೋದರು. ಸೆಫರ್ವ
ಯಿಮಿನ ದೇವರುಗಳೆಲ್ಲಿ? ಅವರು ಸಮಾರ್ಯ
ವನ್ನು ನನ್ನ ಬಲದಿಂದ ರಕ್ಷಿಸಿದರೋ? ಇಲ್ಲ!
20ಬೇರೆ ಯಾವ ದೇಶದ ದೇವರುಗಳು ನನ್ನ ಕೈ
ಯಿಂದ ತಮ್ಮ ಜನರನ್ನು ತಪ್ಪಿಸಿ ಕಾಪಾಡಿದರು?
ಹೀಗಿರಲು ಯೆಹೋವನು ಜೆರುಸಲೇಮನ್ನು
ನನ್ನಿಂದ ರಕ್ಷಿಸುವನೋ? ಇಲ್ಲ!’’

21ಇದನ್ನು ಕೇಳಿ ಜೆರುಸಲೇಮಿನ ಜನರು ಮೌನ
ವಾದರು. ಅವರು ದಳಪತಿಗೆ ಯಾವ ಉತ್ತರವನ್ನೂ ಕೊಡ
ಲಿಲ್ಲ. ಯಾಕೆಂದರೆ ಹಿಜ್ಕೀಯನು ಅವರ ಸಂಗಡ
ಮಾತಾಡಬಾರದೆಂದು ಹೇಳಿದ್ದನು.
22ಹಿಲ್ಕೀಯನ ಮಗನೂ ಅರಮನೆಯ ಆಡಳಿತಾಧಿ
ಕಾರಿಯೂ ಆಗಿದ್ದ ಎಲ್ಯಾಕೀಮ್, ಲೇಖಕನಾದ ಶೆಬ್ನ,
ಆಸಾಫನ ಮಗನೂ ಮಂತ್ರಿಯೂ ಆಗಿದ್ದ ಯೋವ ಎಂಬ

ವರು ತಮ್ಮ ಬಟ್ಟೆಗಳನ್ನು ಹರಿದುಕೊಂಡು ಹಿಜ್ಕೀಯನ
ಬಳಿಗೆ ಬಂದು ಅಶ್ಶೂರದ ದಳಪತಿ ಹೇಳಿದ್ದನ್ನೆಲ್ಲಾ
ತಿಳಿಸಿದರು.

## ಹಿಜ್ಕೀಯನು ದೇವರ ಸಹಾಯಕ್ಕಾಗಿ ಪ್ರಾರ್ಥಿಸಿದ್ದು

37 ಅರಸನಾದ ಹಿಜ್ಕೀಯನು ಎಲ್ಲಾ ವಿಷಯಗ
ಳನ್ನು ಕೇಳಿ ಮನಸ್ಸಿನಲ್ಲಿ ಬಹಳ ದುಃಖಪಟ್ಟು ತನ್ನ
ಬಟ್ಟೆಗಳನ್ನು ಹರಿದುಕೊಂಡನು. ತರುವಾಯ ಶೋಕ
ವಸ್ತ್ರವನ್ನು ಧರಿಸಿ ದೇವಾಲಯದೊಳಕ್ಕೆ ಹೋದನು.
2 ಹಿಜ್ಕೀಯನು ಅರಮನೆಯ ಆಡಳಿತಗಾರನಾದ ಎಲ್ಯಾ
ಕೀಮನನ್ನು, ಕಾರ್ಯದರ್ಶಿಯಾದ ಶೆಬ್ನನನ್ನು ಯಾಜ
ಕರ ಹಿರಿಯರೊಂದಿಗೆ ಆಮೋಚನ ಮಗನೂ ಪ್ರವಾ
ದಿಯೂ ಆದ ಯೆಶಾಯನ ಬಳಿಗೆ ಕಳುಹಿಸಿದನು. ಇವರು
ತಮ್ಮ ಮನಸ್ಸಿನ ದುಗುಡವನ್ನು ಪ್ರದರ್ಶಿಸುವಂತೆ ಶೋಕ
ವಸ್ತ್ರಗಳನ್ನು ಧರಿಸಿದ್ದರು.
3 ಇವರು ಯೆಶಾಯನಿಗೆ, ‘‘ಅರಸನಾದ ಹಿಜ್ಕೀಯನು
ಈ ದಿವಸವನ್ನು ಶೋಕದ ದಿವಸವನ್ನಾಗಿ ಘೋಷಿಸಿದ್ದಾನೆ.
ಇದು ದುಃಖದ ಸಮಯವಾಗಿದೆ. ಇದು ದಿನತುಂಬಿ
ತಾಯಿಯ ಹೊಟ್ಟೆಯೊಳಗಿಂದ ಹೊರಬರಲು ಶಕ್ತವಾಗಿ
ಲ್ಲದ ಕೂಸಿನಂತಿದೆ. 4 ಅಶ್ಶೂರದ ಅರಸನು ತನ್ನ ದಳ
ಪತಿಯ ಮೂಲಕ ನಮ್ಮ ದೇವರಾದ ಯೆಹೋವನ ಬಗ್ಗೆ
ಕೆಟ್ಟಮಾತುಗಳನ್ನು ಹೇಳಲು ಕಳುಹಿಸಿರುತ್ತಾನೆ. ನಿನ್ನ
ದೇವರಾದ ಯೆಹೋವನು ಇದನ್ನೆಲ್ಲಾ ಕೇಳಿರುವನು.
ವೈರಿಗಳು ನುಡಿದ ಆ ಮಾತುಗಳು ಸತ್ಯವಾದವುಗಳಲ್ಲ
ಎಂಬದನ್ನು ಆತನು ತೋರಿಸುವನು. ಆದುದರಿಂದ
ಇನ್ನೂ ಜೀವದಿಂದ ಉಳಿದಿರುವವರಿಗಾಗಿ ಪ್ರಾರ್ಥಿಸು.’’
ಎಂದು ಹಿಜ್ಕೀಯನು ಹೇಳಿದ್ದಾನೆ ಅಂದರು.
5-6 ಆಗ ಯೆಶಾಯನು: ‘‘ನಿಮ್ಮ ಅರಸನಾದ ಹಿಜ್ಕೀಯ
ನಿಗೆ ಈ ಸಂದೇಶವನ್ನು ಕೊಡಿರಿ: ಯೆಹೋವನು ಹೇಳುವ
ದೇನೆಂದರೆ, ದಳಪತಿ ಹೇಳಿದ ಮಾತುಗಳಿಗೆ ನೀವು ಭಯ
ಪಡಬೇಡಿರಿ. ಅಶ್ಶೂರದ ಅರಸನಿಂದ ಬಂದ, ‘‘ಹುಡು
ಗರು’’ ನನ್ನ ವಿಷಯವಾಗಿ ಹೇಳಿದ ಮಾತುಗಳನ್ನು ನಂಬ
ಬೇಡಿರಿ. 7 ನಾನು ಆತ್ಮವನ್ನು ಅಶ್ಶೂರದ ವಿರುದ್ಧವಾಗಿ
ಕಳುಹಿಸುತ್ತೇನೆ. ದೇಶಕ್ಕೆ ಬರಲಿರುವ ಅಪಾಯದ ಬಗ್ಗೆ
ಎಚ್ಚರಿಕೆಯ ವರದಿಯು ರಾಜನಿಗೆ ಬರುತ್ತದೆ. ಅದನ್ನು
ಕೇಳಿ ಅವನು ತನ್ನ ದೇಶಕ್ಕೆ ಹಿಂದಿರುಗುವನು. ಆಗ ಅವನ
ದೇಶದಲ್ಲಿಯೇ ನಾನು ಅವನನ್ನು ಖಡ್ಗದಿಂದ
ಸಂಹರಿಸುವೆನು.’’

## ಅಶ್ಶೂರದ ಸೈನ್ಯವು ಜೆರುಸಲೇಮಿನಿಂದ ಹಿಂತಿರುಗಿತು

8-9 ಅಶ್ಶೂರದ ಅರಸನಿಗೆ ಒಂದು ಸಂದೇಶವು ಬಂದು
ತಲುಪಿತು. ಅದರಲ್ಲಿ ಇಥಿಯೋಪ್ಯದ ಅರಸನಾದ
ತಿರ್ಹಾಕನು ನಿನ್ನೊಂದಿಗೆ ಯುದ್ಧಮಾಡಲು ಬರುತ್ತಿ
ದ್ದಾನೆ ಎಂದು ಬರೆದಿತ್ತು. ಅದನ್ನು ಕೇಳಿ ಅಶ್ಶೂರದ
ಅರಸನು ಲಾಕೀಷನ್ನು ಬಿಟ್ಟು ಲಿಬ್ನಕ್ಕೆ ಹೋದನು.
ದಳಪತಿಗೆ ಈ ಸಮಾಚಾರ ಮುಟ್ಟಿದ ಕೂಡಲೇ ಅವನು
ತನ್ನ ಅರಸನು ಯುದ್ಧಮಾಡುತ್ತಿದ್ದ ಲಿಬ್ನ ಪಟ್ಟಣಕ್ಕೆ
ಹೋದನು. ಅಲ್ಲಿಂದ ಅವನು ಹಿಜ್ಕೀಯನ ಬಳಿಗೆ ತನ್ನ
ದೂತರನ್ನು ಕಳುಹಿಸಿ 10 ಯೆಹೂದದ ಅರಸನಾದ
ಹಿಜ್ಕೀಯನಿಗೆ ನೀವು ಹೀಗೆ ಹೇಳಬೇಕು:

ನೀನು ನಂಬುವ ದೇವರಿಂದ ನೀನು ಮೋಸ
ಹೋಗಬೇಡ.’’ ಜೆರುಸಲೇಮ್ ಅಶ್ಶೂರದ
ಅರಸನ ಕೈಯಿಂದ ಸೋಲಿಸಲ್ಪಡಲು ದೇವರು
ಅವಕಾಶ ಕೊಡುವುದಿಲ್ಲ’’ ಎಂದು ಹೇಳಬೇಡ.

11 ‘‘ಅಶ್ಶೂರದ ಅರಸರು ಬೇರೆ ಎಲ್ಲಾ ದೇಶಗಳವರಿಗೆ
ಏನು ಮಾಡಿದ್ದಾರೆಂದು ನೀವು ಕೇಳಿದ್ದೀರಿ. ಅವರು
ಸಂಪೂರ್ಣವಾಗಿ ತಮ್ಮ ವೈರಿಗಳನ್ನು ನಾಶಮಾಡಿದರು.
ನೀವು ರಕ್ಷಿಸಲ್ಪಡುವಿರಾ? ಇಲ್ಲ! 12 ಅವರ ದೇವರುಗಳು
ಅವರನ್ನು ರಕ್ಷಿಸಿದರೋ? ಇಲ್ಲ! ನನ್ನ ಪೂರ್ವಿಕರು ಅವ
ರನ್ನು ಸಂಪೂರ್ಣವಾಗಿ ನಾಶಮಾಡಿದರು. ಅವರು
ಗೋಜಾನನ್ನು, ಖಾರಾನನ್ನು, ರೆಚೆಫನನ್ನು, ಮತ್ತು
ತೆಲಸ್ಸಾರ್‌ನಲ್ಲಿ ವಾಸವಾಗಿದ್ದ ಎದೆನಿನ ಜನರನ್ನು ನಾಶ
ಮಾಡಿದರು. 13 ಹಮಾತಿನ ಅರಸನೆಲ್ಲಿ? ಅರ್ಪಾದಿನ
ಅರಸನೆಲ್ಲಿ? ಸೆಫರ್ವಯಿಮ್ ನಗರದ ಅರಸರೆಲ್ಲಿ?
ಹೇನ, ಇವ್ವಾ ಇವುಗಳ ಅರಸರೆಲ್ಲಿ? ಅವರೆಲ್ಲರೂ ಹತ
ರಾಗಿದ್ದಾರೆ. ಎಲ್ಲಾ ನಾಶವಾಗಿ ಹೋದರು.

## ದೇವರಿಗೆ ಹಿಜ್ಕೀಯನ ಪ್ರಾರ್ಥನೆ

14 ಹಿಜ್ಕೀಯನು ಆ ದೂತರ ಕೈಗಳಿಂದ ಪತ್ರಗಳನ್ನು
ತೆಗೆದುಕೊಂಡು ಓದಿದನು. ಅನಂತರ ನೇರವಾಗಿ ಆಲ
ಯಕ್ಕೆ ಹೋಗಿ ಆ ಪತ್ರವನ್ನು ದೇವರ ಮುಂದಿಟ್ಟನು.
15 ಹಿಜ್ಕೀಯನು ದೇವರಿಗೆ ಪ್ರಾರ್ಥಿಸುತ್ತಾ ಹೇಳಿದ್ದೇ
ನೆಂದರೆ:

16 ಇಸ್ರೇಲರ ದೇವರೇ, ಸರ್ವಶಕ್ತನಾದ ಯೆಹೋ
ವನೇ, ನೀನು ಕೆರೂಬಿಯರ ರೆಕ್ಕೆಯ ಮೇಲೆ
ಆಸೀನನಾಗಿರುವೆ. ಇಡೀ ಭೂಮಂಡಲದಲ್ಲಿರುವ
ರಾಜ್ಯಗಳನ್ನೆಲ್ಲಾ ನೀನೇ ಆಳುವವನಾಗಿರುವೆ;
ಹೌದು, ನೀನೊಬ್ಬನೇ ಆಳುವವನಾಗಿರುವೆ. ನೀನು
ಆಕಾಶವನ್ನೂ ಭೂಮಿಯನ್ನೂ ನಿರ್ಮಿಸಿರುವೆ.
17 ಯೆಹೋವನೇ,ನನ್ನ ಮಾತುಗಳಿಗೆ ಕಿವಿಗೊಡು.
ದೇವರೇ, ನಿನ್ನ ಕಣ್ಣುಗಳನ್ನು ತೆರೆದು ಈ ಪತ್ರವನ್ನು

ನೋಡು. ಜೀವಸ್ವರೂಪನಾದ ದೇವರೇ, ಸನ್ಹೇರೀ
ಬನು ನಿನ್ನನ್ನು ಅವಮಾನಮಾಡಿ ಬರೆದ ಪತ್ರವನ್ನು
ಕೇಳಿಸಿಕೊ!
18ಅಶ್ಶೂರದ ಅರಸರು ಆ ಎಲ್ಲಾ ಜನಾಂಗಗಳನ್ನು
ನಾಶಮಾಡಿದ್ದು ನಿಜ. 19ಅಶ್ಶೂರದ ಅರಸರು ಆ
ಜನಾಂಗಗಳ ದೇವರುಗಳನ್ನು ಸುಟ್ಟು ಹಾಕಿದರು.
ಆದರೆ ಆ ದೇವರುಗಳು ಸತ್ಯವಾದವುಗಳಲ್ಲ. ಅವು
ಗಳು ಮನುಷ್ಯರು ಕಲ್ಲಿನಿಂದ ಮತ್ತು ಮರದಿಂದ
ಕೆತ್ತಿದ ವಿಗ್ರಹಗಳಾಗಿದ್ದವು. ಆದುದರಿಂದ ಅಶ್ಶೂ
ರದ ಅರಸರು ಅವುಗಳನ್ನು ನಾಶಮಾಡಲು ಸಾಧ್ಯ
ವಾಯಿತು. 20ಆದರೆ ನೀನು ನಮ್ಮ ದೇವರಾದ
ಯೆಹೋವನು. ಆದುದರಿಂದ ದಯಮಾಡಿ
ನಮ್ಮನ್ನು ಅಶ್ಶೂರದ ಅರಸನ ಕೈಯಿಂದ ರಕ್ಷಿಸು.
ಆಗ ಭೂಮಿಯ ಎಲ್ಲಾ ರಾಜ್ಯಗಳೂ ಯೆಹೋವ
ನಾದ ನೀನೇ ದೇವರೆಂದು ತಿಳಿದುಕೊಳ್ಳುವವು.

### ಹಿಜ್ಕೀಯನಿಗೆ ದೇವರ ಉತ್ತರೆ

21ಆಗ ಆಮೋಚನ ಮಗನಾದ ಯೆಶಾಯನು
ಹಿಜ್ಕೀಯನಿಗೆ ಈ ಸಂದೇಶವನ್ನು ಕಳುಹಿಸಿದನು:
‘‘ಇಸ್ರೇಲರ ದೇವರಾದ ಯೆಹೋವನು ಹೇಳುವದೇ
ನೆಂದರೆ: ‘ಅಶ್ಶೂರದ ಅರಸನಾದ ಸನ್ಹೇರೀಬನ ಪತ್ರದ
ವಿಷಯವಾಗಿ ನೀನು ಪ್ರಾರ್ಥಿಸುವದನ್ನು ನಾನು
ಕೇಳಿದೆನು.’
22ಸನ್ಹೇರೀಬನ ಕುರಿತು ಯೆಹೋವನ ಸಂದೇಶವಿದು:

‘‘ಅಶ್ಶೂರದ ಅರಸನೇ, ಚೀಯೋನಿನ ಕುಮಾ
ರಿಯು (ಜೆರುಸಲೇಮ್) ನಿನ್ನನ್ನು ಪ್ರಾಮುಖ್ಯ
ವಾದವನೆಂದು ಎಣಿಸುವದಿಲ್ಲ. ಆಕೆ ನಿನ್ನನ್ನು
ನೋಡಿ ಪರಿಹಾಸ್ಯ ಮಾಡುವಳು. ಜೆರುಸ
ಲೇಮಿನ ಕುಮಾರಿಯು ನಿನ್ನನ್ನು ಹಾಸ್ಯ
ಮಾಡುವಳು.

23 ನೀನು ಅವಮಾನಪಡಿಸಿ ಪರಿಹಾಸ್ಯ ಮಾಡಿ
ವಿರೋಧವಾಗಿ ಮಾತಾಡಿದ್ದು ಯಾರಿಗೆ? ನೀನು
ಇಸ್ರೇಲಿನ ಪರಿಶುದ್ಧನಿಗೆ ವಿರುದ್ಧವಾಗಿರುವೆ.
ಆತನಿಗಿಂತ ನೀನೇ ಉತ್ತಮನೆಂಬ ರೀತಿಯಲ್ಲಿ
ನೀನು ವರ್ತಿಸಿರುವೆ.
24 ನನ್ನ ಒಡೆಯನಾದ ಯೆಹೋವನನ್ನು ತುಚ್ಛೀಕರಿ
ಸಲಿಕ್ಕೆ ನೀನು ನಿನ್ನ ಅಧಿಕಾರಿಯನ್ನು ಕಳುಹಿಸಿದೆ.
‘‘ನನ್ನಲ್ಲಿ ಬಲ ಸಾಮರ್ಥ್ಯಗಳಿವೆ; ನನ್ನಲ್ಲಿ ಅನೇಕಾ
ನೇಕ ರಥಗಳಿವೆ. ನನ್ನ ಬಲದಿಂದ ನಾನು ಲೆಬನೋ
ನನ್ನು ಸೋಲಿಸಿದೆ. ಲೆಬನೋನಿನ ಉನ್ನತ ಶಿಖರ
ಗಳನ್ನು ನಾನು ಏರಿದೆನು. ಲೆಬನೋನಿನ ಮಹಾ
ಮರಗಳನ್ನೆಲ್ಲಾ (ಸೈನ್ಯ) ನಾನು ಕಡಿದುಹಾಕಿದೆನು.
ನಾನು ಅತ್ಯುನ್ನತ ಶಿಖರಕ್ಕೂ ದಟ್ಟವಾದ ಕಾಡಿ
ನೊಳಗೂ ಹೋಗಿದ್ದೇನೆ.
25 ನಾನು ಬಾವಿಗಳನ್ನು ತೋಡಿ ಹೊಸಹೊಸ ಸ್ಥಳದ
ನೀರು ಕುಡಿದಿರುವೆನು. ಈಜಿಪ್ಟಿನ ನದಿಗಳನ್ನು
ಬತ್ತಿಸಿ ದೇಶದಲ್ಲೆಲ್ಲಾ ಸಂಚರಿಸಿದೆನು’’ ಎಂದು
ನೀನು ಹೇಳಿದೆ.
26 ಆದರೆ ದೇವರು ಏನು ಹೇಳುತ್ತಾನೆಂದು ಕೇಳಿ
ದೆಯಾ? ‘‘ಬಹುಕಾಲದ ಹಿಂದೆ ನಾನು ಯೋಜನೆ
ಯನ್ನು ಮಾಡಿದ್ದೆನು. ಪ್ರಾಚೀನ ಕಾಲದಿಂದ ಅದರ
ವಿಷಯವಾಗಿ ಆಲೋಚನೆ ಮಾಡಿದ್ದೆನು ಈಗ ಅದು
ನೆರವೇರುವಂತೆ ಮಾಡಿದ್ದೇನೆ. ಬಲಿಷ್ಠವಾದ ನಗರ
ಗಳನ್ನು ನಾಶಮಾಡಿ ಅವುಗಳನ್ನು ಕಲ್ಲಿನ ರಾಶಿಗ
ಳನ್ನಾಗಿ ಮಾಡಲು ನಿನ್ನನ್ನು ಬಿಟ್ಟಿರುತ್ತೇನೆ.
27 ಆ ಪಟ್ಟಣಗಳಲ್ಲಿದ್ದ ಜನರು ನಿಸ್ಸಹಾಯಕರಾದರು
ಮತ್ತು ಬಲಹೀನರಾದರು. ಅವರು ಹೆದರಿ ಗಲಿ
ಬಿಲಿಗೊಂಡಿದ್ದಾರೆ. ಅವರು ಹೊಲದ ಹುಲ್ಲಿ
ನಂತೆಯೂ ಸಸಿಗಳಂತೆಯೂ ಕಡಿದು ಹಾಕಲ್ಪಡ
ಲಿದ್ದಾರೆ. ಅವರು ಮನೆಯ ಮೇಲೆ ಬೆಳೆಯುವ
ಹುಲ್ಲಿನಂತಿದ್ದಾರೆ. ಅವು ಉದ್ದವಾಗಿ ಬೆಳೆಯುವ
ಮೊದಲೇ ಸಾಯುವವು.
28 ನಿಮ್ಮ ಸೈನ್ಯದ ಬಗ್ಗೆಯೂ ನಿಮ್ಮ ಯುದ್ಧಗಳ
ಬಗ್ಗೆಯೂ ನನಗೆ ಗೊತ್ತಿದೆ. ನೀವು ವಿಶ್ರಾಂತಿ
ತೆಗೆದುಕೊಂಡದ್ದೂ ನನಗೆ ಗೊತ್ತಿದೆ. ನೀವು
ಯುದ್ಧಕ್ಕೆ ಹೋದದ್ದೂ ನನಗೆ ಗೊತ್ತಿದೆ. ನೀವು
ಯುದ್ಧದಿಂದ ಹಿಂತಿರುಗಿ ಮನೆಗೆ ಬಂದದ್ದೂ ನನಗೆ
ಗೊತ್ತಿದೆ. ನೀವು ನನ್ನ ಮೇಲೆ ಕೋಪ ೊಂಡಿ
ರುವುದೂ ನನಗೆ ಗೊತ್ತಿದೆ.
29 ಹೌದು, ನೀನು ನನ್ನ ವಿಷಯದಲ್ಲಿ ಬೇಸರಗೊಂಡಿ
ರುವೆ. ಗರ್ವದಿಂದ ತುಂಬಿದ ನಿನ್ನ ಪರಿಹಾಸ್ಯದ
ಮಾತುಗಳನ್ನು ನಾನು ಕೇಳಿದ್ದೇನೆ. ನಾನು ನಿನ್ನ
ಮೂಗಿಗೆ ಕೊಕ್ಕೆ ಸಿಕ್ಕಿಸಿ, ನಿನ್ನ ಬಾಯಿಗೆ ಕಡಿವಾಣ
ವನ್ನು ಹಾಕಿ, ನೀನು ಎಲ್ಲಿಂದ ಬಂದಿದ್ದೆಯೋ
ಅಲ್ಲಿಗೆ ನಿನ್ನನ್ನು ಹಿಂತಿರುಗಿಸುತ್ತೇನೆ.’’

### ಹಿಜ್ಕೀಯನಿಗೆ ಯೆಹೋವನ ಸಂದೇಶ

30ಆಗ ಯೆಹೋವನು ಹಿಜ್ಕೀಯನಿಗೆ, ‘‘ಈ ಮಾತುಗ
ಳೆಲ್ಲಾ ಸತ್ಯವೆಂಬುದಕ್ಕೆ ನಿನಗೊಂದು ಗುರುತನ್ನು
ಕೊಡುತ್ತೇನೆ. ಬೀಜ ಬಿತ್ತಲು ನಿನಗೆ ಸಾಧ್ಯವಿರಲಿಲ್ಲ.
ಆದುದರಿಂದ ಕಳೆದ ವರ್ಷದ ಬೆಳೆಯ ಕೂಳೆಬೆಳೆಯನ್ನು
ನೀನು ಈ ವರ್ಷ ಊಟಮಾಡುವೆ. ಆದರೆ ಮೂರು

ವರುಷಗಳ ನಂತರ ನೀನೇ ಬಿತ್ತಿದ ಬೀಜದಲ್ಲಿ ಬೆಳೆದ
ಬೆಳೆಯನ್ನು ಊಟಮಾಡುವೆ. ಆ ಬೆಳೆಯಿಂದ ನಿನಗೆ
ಬೇಕಾದಷ್ಟು ಆಹಾರ ಸಂಗ್ರಹವಾಗುವದು. ನೀನು
ದ್ರಾಕ್ಷಾಲತೆಗಳನ್ನು ನೆಟ್ಟು ಅದರ ಫಲಗಳನ್ನು ತಿನ್ನುವೆ.
31‘‘ಯೆಹೂದ ಕುಲದವರಲ್ಲಿ ತಪ್ಪಿಸಿಕೊಂಡು
ಜೀವಂತವಾಗಿ ಉಳಿದವರು ಮತ್ತೆ ಅಭಿವೃದ್ಧಿಯಾಗು
ವರು. ತಮ್ಮ ಬೇರುಗಳನ್ನು ಆಳವಾಗಿ ಇಳಿಯಬಿಟ್ಟು
ಹಣ್ಣುಗಳನ್ನು ಬಿಡುವ ಗಿಡಗಳಂತೆ ಅವರಿರುವರು.
32ಯಾಕೆಂದರೆ ಸ್ವಲ್ಪ ಮಂದಿ ಮಾತ್ರವೇ ಜೀವಂತವಾಗಿ
ಉಳಿಯುವರು. ಅವರು ಜೆರುಸಲೇಮಿನಿಂದ ಹೊರಟು
ಹೋಗುವರು. ಉಳಿದವರು ಚೀಯೋನ್ ಪರ್ವತದಿಂದ
ಬರುವರು.’’ ಯೆಹೋವನ ಆಳವಾದ ಪ್ರೀತಿಯೇ
ಇದನ್ನು ಮಾಡುವದು.
33ಆದ್ದರಿಂದ ಯೆಹೋವನು ಅಶ್ಶೂರದ ಅರಸನ ಬಗ್ಗೆ
ಹೇಳುವನು:

‘‘ಅವನು ಈ ಪಟ್ಟಣದೊಳಗೆ ಬರುವದಿಲ್ಲ. ಅವನು
ಒಂದು ಬಾಣವನ್ನೂ ಈ ಪಟ್ಟಣದ ಮೇಲೆ
ಹಾರಿಸುವದಿಲ್ಲ. ಅವನು ತನ್ನ ಗುರಾಣಿಗಳನ್ನು ಈ
ಪಟ್ಟಣಕ್ಕೆ ತರುವದಿಲ್ಲ. ಈ ಪಟ್ಟಣದ ಗೋಡೆಗಳ
ಮೇಲೆ ಆಕ್ರಮಣ ಮಾಡಲು ಅವನು ದಿಬ್ಬ
ಹಾಕುವದಿಲ್ಲ.
34 ಅವನು ಬಂದ ದಾರಿಯಿಂದಲೇ ಹಿಂದಕ್ಕೆ ಹೋಗು
ವನು. ಅವನು ಈ ಪಟ್ಟಣದೊಳಗೆ ಬರುವದಿಲ್ಲ.
ಇದು ಯೆಹೋವನ ನುಡಿ.
35 ನಾನು ಈ ಪಟ್ಟಣವನ್ನು ರಕ್ಷಿಸಿ ಕಾಪಾಡುವೆನು.
ನನಗೋಸ್ಕರವಾಗಿಯೇ ಇದನ್ನು ಮಾಡುವೆನು.
ನನ್ನ ಸೇವಕನಾದ ದಾವೀದನಿಗೋಸ್ಕರವಾಗಿಯೂ
ಇದನ್ನು ಮಾಡುವೆನು.’’

36ಆ ರಾತ್ರಿ, ಯೆಹೋವನ ದೂತನು ಹೊರಟುಹೋಗಿ
ಅಶ್ಶೂರದ ಪಾಳೆಯದಲ್ಲಿ ಒಂದು ಲಕ್ಷದ ಎಂಭತ್ತೈದು
ಸಾವಿರ ಮಂದಿಯನ್ನು ಸಂಹರಿಸಿದನು. ಜನರು ಬೆಳಿಗ್ಗೆ
ಎದ್ದಾಗ ಸುತ್ತಲೂ ಹೆಣಗಳು ಬಿದ್ದಿದ್ದವು. 37ಅಶ್ಶೂರದ
ಅರಸನಾದ ಸನ್ಹೇರೀಬನು ನಿನೆವೆಗೆ ಹಿಂದಿರುಗಿ ಅಲ್ಲಿಯೇ
ಉಳಿದನು.
38ಒಂದು ದಿವಸ ಸನ್ಹೇರೀಬನು ತನ್ನ ದೇವರಾದ
ನಿಸ್ರೋಕನ ಮಂದಿರದಲ್ಲಿ ಪೂಜಿಸುತ್ತಿರುವಾಗ ಅವನ
ಇಬ್ಬರು ಮಕ್ಕಳಾದ ಅದ್ರಮೆಲೆಕ್ ಮತ್ತು ಸರೆಚರ್ ಎಂಬ
ವರು ಅವನನ್ನು ಕತ್ತಿಯಿಂದ ಸಂಹರಿಸಿ ಅರರಾಟ್
ಪಲಾಯನಗೈದರು. ಅನಂತರ ಸನ್ಹೇರೀಬನ ಮಗ
ಏಸರ್‌ಹದ್ದೋನನು ಅಶ್ಶೂರದ ಹೊಸ ಅರಸನಾದನು.

## ಹಿಜ್ಕೀಯನ ಅಸ್ವಸ್ಥತೆ

38 ಆ ಸಮಯದಲ್ಲಿ ಹಿಜ್ಕೀಯನು ರೋಗಗ್ರಸ್ತ
ನಾಗಿ ಸಾಯುವ ಸ್ಥಿತಿಯಲ್ಲಿದ್ದನು. ಆಮೋಚನ
ಮಗನೂ ಪ್ರವಾದಿಯೂ ಆದ ಯೆಶಾಯನು ಅವನನ್ನು
ನೋಡಲು ಹೋದನು. ಯೆಶಾಯನು ಅರಸನಿಗೆ,
‘‘ಯೆಹೋವನು ಈ ವಿಷಯಗಳನ್ನು ನಿನಗೆ ತಿಳಿಸಲು
ಹೇಳಿದ್ದಾನೆ: ‘ನೀನು ಬೇಗನೇ ಸಾಯುವೆ. ಆದುದರಿಂದ
ನೀನು ಸಾಯುವಾಗ ನಿನ್ನ ಕುಟುಂಬದವರು ಮಾಡ
ಬೇಕಾದದ್ದನ್ನು ಅವರಿಗೆ ತಿಳಿಸು. ನಿನಗೆ ಗುಣ
ವಾಗುವುದಿಲ್ಲ’’ ಎಂದು ಹೇಳಿದನು.
2ಹಿಜ್ಕೀಯನು ದೇವಾಲಯದ ಕಡೆಗಿರುವ ಗೋಡೆಯ
ಕಡೆಗೆ ಮುಖ ಮಾಡಿ ದೇವರಿಗೆ, 3‘‘ಯೆಹೋವನೇ ನಾನು
ನಿನ್ನನ್ನು ಪೂರ್ಣ ಹೃದಯದಿಂದ ಸೇವೆ ಮಾಡಿದ್ದನ್ನು
ಜ್ಞಾಪಿಸಿಕೋ. ನಿನಗೆ ಇಷ್ಟವಾದದ್ದನ್ನೆಲ್ಲ ನಾನು
ಮಾಡಿದ್ದೇನೆ’’ ಎಂದು ಹೇಳಿ ಬಹಳವಾಗಿ ಅತ್ತನು.
4ಆಗ ಯೆಶಾಯನಿಗೆ ಈ ಸಂದೇಶವು ಯೆಹೋವ
ನಿಂದ ಬಂದಿತು: ‘‘ ಹಿಜ್ಕೀಯನ ಬಳಿಗೆ ಹೋಗಿ ಹೇಳು,
5ನಿನ್ನ ಪೂರ್ವಿಕನಾದ ದಾವೀದನ ದೇವರಾದ ಯೆಹೋ
ವನು ಹೇಳುವದೇನೆಂದರೆ: ‘ನಿನ್ನ ಪ್ರಾರ್ಥನೆಯನ್ನು ನಾನು
ಕೇಳಿದೆನು; ನಿನ್ನ ಕಣ್ಣೀರನ್ನು ನೋಡಿದೆನು. ನಿನ್ನ
ಆಯುಷ್ಯಕ್ಕೆ ಹದಿನೈದು ವರ್ಷಗಳನ್ನು ಸೇರಿಸಿದ್ದೇನೆ.
6ನಾನು ನಿನ್ನನ್ನೂ ಈ ಪಟ್ಟಣವನ್ನೂ ಕಾಪಾಡುವೆನು.
ಅಶ್ಶೂರದ ಅರಸನಿಂದ ರಕ್ಷಿಸುವೆನು.’’
ಆಗ ಹಿಜ್ಕೀಯನು ಯೆಶಾಯನಿಗೆ, ‘‘ನಾನು ಸ್ವಸ್ಥ
ಹೊಂದುವೆನೆಂಬುದಕ್ಕೆ ಗುರುತೇನು? ನಾನು ದೇವರ
ಆಲಯಕ್ಕೆ ಮತ್ತೆ ಹೋಗುವೆನೆಂಬುದಕ್ಕೆ ಗುರುತೇನು?’’
ಎಂದು ಕೇಳಿದನು.
7‘‘ದೇವರು ತಾನು ಹೇಳಿದ್ದನ್ನು ನೆರವೇರಿಸುತ್ತಾನೆ
ಎಂಬುದಕ್ಕೆ ಗುರುತೇನೆಂದರೆ: 8ಇಗೋ, ಆಹಾಜನ
ಮೆಟ್ಟಲಲ್ಲಿರುವ ನೆರಳು ಹತ್ತು ಮೆಟ್ಟಲು ಹಿಂದಕ್ಕೆ
ಹೋಗುವಂತೆ ಮಾಡುವೆನು’’ ಎಂದು ಹೇಳಿದನು.
8ಯೆಶಾಯನು ಹಿಜ್ಕೀಯನಿಗೆ, ‘‘ನೀನು ಅಂಜೂರದ
ಉಂಡೆ ಮಾಡಿ ಅದನ್ನು ನಿನ್ನ ಗಾಯದ ಮೇಲಿಡು. ಆಗ
ನೀನು ಗುಣಹೊಂದುವೆ’’ ಎಂದು ಹೇಳಿದನು.
9ಹಿಜ್ಕೀಯನು ತನ್ನ ಕಾಯಿಲೆಯಿಂದ ಗುಣ ಹೊಂದಿದ
ಬಳಿಕ ಬರೆದ ಪತ್ರ:

10 ‘‘ನಾನು ವೃದ್ಧನಾಗುವ ತನಕ ಬದುಕುವೆನೆಂದು
ನಾನು ನನ್ನೊಳಗೆ ಅಂದುಕೊಂಡಿದ್ದೆನು. ಆದರೆ
ನಾನು ಮರಣದ್ವಾರದ ಮೂಲಕ ಹೋಗುವ
ಸಮಯ ಬಂತು. ನನ್ನ ಜೀವಮಾನವೆಲ್ಲ ಅಲ್ಲಿ
ಕಳೆಯುವೆನು.’’

11 ಅದಕ್ಕೆ ನಾನೆಂದೆ: ‘‘ಇನ್ನು ಮೇಲೆ ಜೀವಿತರ ಲೋಕ
ದಲ್ಲಿ ಇನ್ನು ದೇವರಾದ ಯೆಹೋವನನ್ನು ನೋಡು
ವದಿಲ್ಲ. ಇನ್ನು ಮೇಲೆ ಜನರು ಲೋಕದಲ್ಲಿ
ಜೀವಿಸುವದನ್ನು ನಾನು ನೋಡುವದಿಲ್ಲ.
12 ನನ್ನ ಮನೆಯು ಅಂದರೆ ನನ್ನ ಕುರುಬನ ಗುಡಾ
ರವು ಕೀಳಲ್ಪಟ್ಟು ನನ್ನಿಂದ ತೆಗೆಯಲ್ಪಡುತ್ತಿದೆ.
ಒಬ್ಬನು ಮಗ್ಗದಲ್ಲಿ ಬಟ್ಟೆಯನ್ನು ಸುತ್ತಿ ಕತ್ತರಿಸಿ
ಬಿಡುವಂತೆ ನಾನು ಕತ್ತರಿಸಲ್ಪಟ್ಟಿದ್ದೇನೆ. ನನ್ನ
ಆಯುಷ್ಯವನ್ನು ಚಿಕ್ಕವಯಸ್ಸಿನಲ್ಲಿಯೇ ಮುಗಿಸಿ
ಬಿಟ್ಟಿರುವೆ.
13 ಇಡೀ ರಾತ್ರಿ, ನಾನು ಸಿಂಹದಂತೆ ಗರ್ಜಿಸಿದೆನು.
ಆದರೆ ಸಿಂಹವು ಎಲುಬನ್ನು ಜಗಿದು ಪುಡಿಮಾಡು
ವಂತೆ ನನ್ನ ನೀರಿಕ್ಷೆಯೆಲ್ಲಾ ಜಜ್ಜಿಹೋಯಿತು.
ನೀನು ನನ್ನ ಜೀವಿತವನ್ನು ಅಷ್ಟು ಅಲ್ಪ ಕಾಲಕ್ಕೇ
ಕೊನೆಗೊಳಿಸಿದೆ!

14 ನಾನು ಪಾರಿವಾಳದಂತೆ ಕೂಗಿಕೊಂಡೆನು. ಪಕ್ಷಿ
ಯಂತೆ ಅರಚಿಕೊಂಡೆನು. ನನ್ನ ಕಣ್ಣುಗಳು ಸ್ವರ್ಗದ
ಕಡೆಗೆ ನೋಡುತ್ತಾ ಆಯಾಸಗೊಂಡವು. ನನ್ನ ಒಡೆ
ಯನೇ, ನಾನು ತುಂಬಾ ಚಿಂತಾಕ್ರಾಂತನಾಗಿ
ದ್ದೇನೆ. ನೀನು ನನಗೆ ಸಹಾಯ ಮಾಡುವುದಾಗಿ
ವಾಗ್ದಾನ ಮಾಡು.
15 ನಾನೇನು ಹೇಳಲಿ? ನನಗೆ ಸಂಭವಿಸಲಿರುವುದನ್ನು
ನನ್ನ ಒಡೆಯನು ತಿಳಿಸಿದ್ದಾನೆ. ನನ್ನ ಒಡೆಯನು
ಅದನ್ನು ನೆರವೇರಿಸುತ್ತಾನೆ. ನನ್ನ ಆತ್ಮದಲ್ಲಿ ಸಂಕಟ
ಗಳೆಲ್ಲಾ ತುಂಬಿವೆ. ನಾನು ನನ್ನ ಜೀವಮಾನವೆಲ್ಲಾ
ದೀನನಾಗುವೆನು.
16 ನನ್ನ ಒಡೆಯನೇ, ನನ್ನ ಆತ್ಮವು ಪುನರುಜ್ಜೀವಿಸು
ವಂತೆ ಮಾಡು. ನನ್ನ ಆತ್ಮವು ಬಲಗೊಂಡು
ಆರೋಗ್ಯದಾಯಕವಾಗುವಂತೆ ಸಹಾಯಮಾಡು.
ನಾನು ತಿರುಗಿ ಸ್ವಸ್ಥತೆ ಹೊಂದುವಂತೆ ಮಾಡು.
ನಾನು ಮತ್ತೆ ಜೀವಿಸುವಂತೆ ಮಾಡು.
17 ಇಗೋ, ನನ್ನ ಸಂಕಟವೆಲ್ಲಾ ಹೊರಟು
ಹೋಯಿತು. ನನಗೀಗ ಸಮಾಧಾನವಿದೆ. ನೀನು
ನನ್ನನ್ನು ಬಹಳವಾಗಿ ಪ್ರೀತಿಸುವದರಿಂದ ನನ್ನ ಶರೀ
ರವು ಸಮಾಧಿಯಲ್ಲಿ ಕೊಳೆಯುವಂತೆ ಮಾಡಲಿಲ್ಲ.
ನೀನು ನನ್ನ ಪಾಪಗಳನ್ನು ಕ್ಷಮಿಸಿದೆ. ನನ್ನ ಪಾಪ
ಗಳನ್ನು ಬಹುದೂರ ಬಿಸಾಡಿದೆ.
18 ಸತ್ತವರು ನಿನ್ನನ್ನು ಸ್ತುತಿಸುವದಿಲ್ಲ. ನರಕದಲ್ಲಿರುವ
ಜನರು ನಿನ್ನನ್ನು ಸ್ತುತಿಸುವದಿಲ್ಲ. ಸತ್ತು ಹೋದ
ವರು ಸಹಾಯಕ್ಕಾಗಿ ನಿನ್ನ ಮೇಲೆ ಭರವಸವಿಡರು.
ಅವರು ಭೂಮಿಯಲ್ಲಿರುವ ಆಳವಾದ ಕುಣಿಗೆ
ಸೇರುವರು. ಅವರು ತಿರುಗಿ ಮಾತನಾಡುವದೇ
ಇಲ್ಲ.
19 ನನ್ನ ಹಾಗೆ ಈ ದಿನ ಜೀವಿಸುವವರೆಲ್ಲಾ ನಿನ್ನನ್ನು
ಕೊಂಡಾಡುವರು. ತಂದೆಯು ತನ್ನ ಮಕ್ಕಳಿಗೆ ನಿನ್ನ
ಮೇಲೆ ಭರವಸವಿಡಲು ಕಲಿಸಬೇಕು.
20 ನಾನು ಹೇಳುವದೇನೆಂದರೆ: ‘‘ಯೆಹೋವನು
ನನ್ನನ್ನು ರಕ್ಷಿಸಿದನು. ನಾವು ಹಾಡುತ್ತಾ ಯೆಹೋ
ವನ ಆಲಯದಲ್ಲಿ ವಾದ್ಯಬಾರಿಸುತ್ತಾ ನಮ್ಮ ಜೀವ
ಮಾನದ ಕಾಲವೆಲ್ಲಾ ಆತನನ್ನು ಸ್ತುತಿಸುವೆವು.’’

## ಬಾಬಿಲೋನಿನಿಂದ ಬಂದ ಸಂದೇಶವಾಹಕರು

39 ಆ ಸಮಯದಲ್ಲಿ ಬಲದಾನ್ ಎಂಬವನ ಮಗ
ನಾದ ಮೆರೋದಕಬಲದಾನ್ ಎಂಬವನು
ಬಾಬಿಲೋನಿನ ಅರಸನಾಗಿದ್ದನು. ಅವನು ಹಿಜ್ಕೀಯ
ನಿಗೆ ಒಂದು ಪತ್ರವನ್ನೂ ಜೊತೆಗೆ ಬಹುಮಾನಗಳನ್ನೂ
ತನ್ನ ದೂತರ ಸಂಗಡ ಕಳುಹಿಸಿದನು. ಮೆರೋದಕನಿಗೆ
ಹಿಜ್ಕೀಯನು ಅಸ್ವಸ್ಥನಾಗಿದ್ದಾನೆಂಬ ವರ್ತಮಾನ ತಲುಪಿ
ದ್ದರಿಂದ ಅವನು ಈ ರೀತಿಯಾಗಿ ಮಾಡಿದನು. 2 ಅವುಗ
ಳನ್ನು ನೋಡಿ ಹಿಜ್ಕೀಯನಿಗೆ ಬಹು ಸಂತೋಷವಾಯಿತು.
ಅವನು ಬಾಬಿಲೋನಿನ ದೂತರಿಗೆ ತನ್ನ ಅರಮನೆಯ
ಉಗ್ರಾಣದಲ್ಲಿದ್ದ ಎಲ್ಲಾ ಬೆಲೆಬಾಳುವ ವಸ್ತುಗಳನ್ನೂ
ತಾನು ಕೂಡಿಸಿಟ್ಟಿದ್ದ ಬೆಳ್ಳಿಬಂಗಾರಗಳನ್ನೂ ಸಂಬಾರ
ಪದಾರ್ಥಗಳನ್ನೂ ಮತ್ತು ಸುಗಂಧ ದ್ರವ್ಯಗಳನ್ನೂ
ತೋರಿಸಿದನು. ಅಲ್ಲದೆ ಯುದ್ಧದಲ್ಲಿ ಉಪಯೋಗಿಸುವ
ಖಡ್ಗಗಳನ್ನು ಗುರಾಣಿಗಳನ್ನು ತೋರಿಸಿದನು: ಅಲ್ಲದೆ ತನ್ನ
ರಾಜ್ಯದಲ್ಲಿರುವ ಪ್ರತಿಯೊಂದು ವಿಷಯಗಳನ್ನು ಅವರಿಗೆ
ಪ್ರದರ್ಶಿಸಿದನು.
3 ಆಗ ಪ್ರವಾದಿಯಾದ ಯೆಶಾಯನು ಅರಸನಾದ
ಹಿಜ್ಕೀಯನ ಬಳಿಗೆ ಹೋಗಿ, ‘‘ನಿನ್ನ ಬಳಿಗೆ ಬಂದವರು
ಎಲ್ಲಿಯವರು? ಅವರು ಏನನ್ನು ಹೇಳಿದರು?’’ ಎಂದು
ವಿಚಾರಿಸಿದನು.

ಅದಕ್ಕೆ ಹಿಜ್ಕೀಯನು, ‘‘ಇವರು ಬಹುದೂರ ದೇಶ
ದಿಂದ ನನ್ನನ್ನು ಸಂಧಿಸಲು ಬಂದಿದ್ದಾರೆ. ಅವರ ದೇಶ
ಬಾಬಿಲೋನ್’’ ಎಂದನು.
4 ‘‘ನಿನ್ನ ಮನೆಯಲ್ಲಿ ಅವರು ಏನು ನೋಡಿದರು?’’
ಎಂದು ತಿರುಗಿ ಯೆಶಾಯನು ಪ್ರಶ್ನಿಸಿದನು.

‘‘ಅವರು ನನ್ನ ಅರಮನೆಯಲ್ಲಿರುವದನ್ನೆಲ್ಲಾ ನೋಡಿ
ದರು. ನಾನು ನನ್ನ ಐಶ್ವರ್ಯವನ್ನೆಲ್ಲಾ ಅವರಿಗೆ ತೋರಿಸಿ
ದೆನು’’ ಎಂದು ಹಿಜ್ಕೀಯನು ಉತ್ತರಿಸಿದನು.
5 ಆಗ ಯೆಶಾಯನು ಹಿಜ್ಕೀಯನಿಗೆ, ‘‘ಸರ್ವಶಕ್ತನಾದ
ಯೆಹೋವನ ಮಾತುಗಳನ್ನು ಕೇಳು. 6 ‘‘ನಿನ್ನ ಮನೆಯ
ಲ್ಲಿರುವ ಎಲ್ಲಾ ವಸ್ತುಗಳೂ ನಿನ್ನ ಪೂರ್ವಿಕರು ಕೂಡಿಟ್ಟಿದ್ದ

ಎಲ್ಲಾ ವಸ್ತುಗಳೂ ಇಲ್ಲಿಂದ ಬಾಬಿಲೋನಿಗೆ ಒಯ್ಯುವ ಕಾಲವು ಬರುವದು. ಇಲ್ಲಿ ಏನೂ ಉಳಿಯುವದಿಲ್ಲ, ಇದು ಸರ್ವಶಕ್ತನಾದ ಯೆಹೋವನ ನುಡಿ. [7]ಬಾಬಿಲೋನಿನವರು ನಿನ್ನ ಗಂಡುಮಕ್ಕಳನ್ನು ತೆಗೆದುಕೊಂಡು ಹೋಗುವರು. ಅವರು ಬಾಬಿಲೋನಿನ ಅರಮನೆಗಳಲ್ಲಿ ಕಂಚುಕಿಯರಾಗಿ ಸೇವೆಮಾಡುವರು'' ಎಂದು ಹೇಳಿದನು.

[8]ಅದಕ್ಕೆ ಹಿಜ್ಕೀಯನು, ''ಯೆಹೋವನ ಮಾತುಗಳು ಒಳ್ಳೆಯವೇ ಸರಿ'' ಎಂದನು. ಯಾಕೆಂದರೆ ತಾನು ಅರಸನಾಗಿರುವಷ್ಟು ಕಾಲ ದೇಶದಲ್ಲಿ ಸಮಾಧಾನವಿರುವುದೆಂದು ಅವನು ಯೋಚಿಸಿಕೊಂಡನು.

## ಇಸ್ರೇಲಿನ ಶಿಕ್ಷೆಯು ಅಂತ್ಯವಾಗುವದು

40 ನಿನ್ನ ದೇವರು ಹೇಳುವದೇನೆಂದರೆ: ''ನನ್ನ ಜನರನ್ನು ಸಂತೈಸು, ಸಂತೈಸು.

2 ಜೆರುಸಲೇಮಿನೊಂದಿಗೆ ಕರುಣೆಯಿಂದ ಮಾತಾಡು. ಜೆರುಸಲೇಮಿಗೆ ಹೀಗೆ ಹೇಳು: 'ನಿನ್ನ ಸೆರೆವಾಸದ ಸಮಯವು ಅಂತ್ಯವಾಯಿತು. ನೀನು ನಿನ್ನ ಪಾಪಗಳ ಶಿಕ್ಷೆಯನ್ನು ಅನುಭವಿಸಿದೆ.''' ಜೆರುಸಲೇಮ್ ಮಾಡಿದ ಪ್ರತಿಯೊಂದು ಪಾಪ ಕೃತ್ಯಗಳಿಗಾಗಿ ಯೆಹೋವನು ಎರಡು ಬಾರಿ ಶಿಕ್ಷಿಸಿದನು.

3 ಒಬ್ಬ ಮನುಷ್ಯನು ಕೂಗಿಹೇಳುವದನ್ನು ಕೇಳಿರಿ: ''ಯೆಹೋವನಿಗೆ ಅಡವಿಯಲ್ಲಿ ದಾರಿ ಮಾಡಿರಿ! ನಮ್ಮ ದೇವರಿಗೆ ಮಾರ್ಗವನ್ನು ಸರಾಗಮಾಡಿರಿ!

4 ತಗ್ಗುಗಳನ್ನು ಸಮತಟ್ಟು ಮಾಡಿರಿ. ಎಲ್ಲಾ ಬೆಟ್ಟಗುಡ್ಡಗಳನ್ನು ನೆಲಸಮ ಮಾಡಿರಿ. ಕೊರಕಲು ರಸ್ತೆಗಳನ್ನು ನೆಟ್ಟಗೆ ಮಾಡಿರಿ. ಏರುತಗ್ಗು ನೆಲವನ್ನು ಸಮಗೊಳಿಸಿರಿ.

5 ಆಗ ಯೆಹೋವನ ಮಹಿಮೆಯು ಪ್ರದರ್ಶಿಸಲ್ಪಡುವದು. ಆಗ ಎಲ್ಲರೂ ಯೆಹೋವನ ಮಹಿಮೆಯನ್ನು ನೋಡುವರು. ಇವು ಯೆಹೋವನ ನುಡಿಗಳು.''

6 ಒಂದು ಸ್ವರವು ''ಮಾತನಾಡು''ಎಂದಿತು. ಅದಕ್ಕೆ ಮನುಷ್ಯನು, ''ಏನು ಮಾತಾಡಲಿ''ಅಂದನು. ಆಗ ಸ್ವರವು, ''ಜನರು ಶಾಶ್ವತವಾಗಿ ಜೀವಿಸುವದಿಲ್ಲ, ಅವರೆಲ್ಲರೂ ಹುಲ್ಲಿನಂತಿದ್ದಾರೆ. ಅವರ ಒಳ್ಳೆಯತನವು ಕಾಡುಹೂವಿನಂತಿದೆ.

7 ಯೆಹೋವನ ಕಡೆಯಿಂದ ಒಂದು ಬಲವಾದ ಗಾಳಿಯು ಹುಲ್ಲಿನ ಮೇಲೆ ಬೀಸಿತು. ಆ ಹುಲ್ಲು ಒಣಗಿಹೋಯಿತು. ಕಾಡಿನ ಪುಷ್ಪವು ಬಾಡಿಹೋಯಿತು.''

8 ಜನರೆಲ್ಲರೂ ಹುಲ್ಲಿನಂತಿದ್ದಾರೆ. ಹುಲ್ಲು ಸಾಯುತ್ತದೆ. ಪುಷ್ಪಗಳು ಉದುರುತ್ತವೆ. ಆದರೆ ನಮ್ಮ ದೇವರ ಮಾತುಗಳು ಶಾಶ್ವತವಾಗಿವೆ.

## ದೇವರ ಸುವಾರ್ತೆ–ರಕ್ಷಣೆ

9 ಚೀಯೋನೇ, ಸಾರಿ ತಿಳಿಸಲು ನಿನಗೆ ಒಂದು ಸುವಾರ್ತೆಯಿದೆ. ಉನ್ನತ ಪರ್ವತಕ್ಕೆ ಏರಿಹೋಗಿ ಸುವಾರ್ತೆಯನ್ನು ಗಟ್ಟಿಯಾಗಿ ಸಾರು! ಜೆರುಸಲೇಮೇ, ನಿನಗೆ ತಿಳಿಸಲು ಒಳ್ಳೆಯ ವಾರ್ತೆ ಇದೆ. ಹೆದರಬೇಡ. ಅದನ್ನು ಘಟ್ಟಿಯಾಗಿ ಸಾರು.

ಯೆಹೂದದ ಎಲ್ಲಾ ನಗರಗಳಲ್ಲಿ ತಿಳಿಸು: ''ಇಗೋ! ನಿನ್ನ ದೇವರು ಇಲ್ಲಿದ್ದಾನೆ.

10 ನನ್ನ ಒಡೆಯನಾದ ಯೆಹೋವನು ಬಲಸಾಮರ್ಥ್ಯಗಳೊಡನೆ ಬರುತ್ತಿದ್ದಾನೆ. ಆತನು ಪರಾಕ್ರಮದಿಂದ ಎಲ್ಲಾ ಜನರನ್ನು ಆಳುವನು. ಆತನು ತನ್ನ ಜನರಿಗೆ ಪ್ರತಿಫಲಗಳನ್ನು ತರುವನು. ಅವರ ಸಂಬಳವು ಆತನ ಕೈಯಲ್ಲಿದೆ.

11 ಯೆಹೋವನು ತನ್ನ ಜನರನ್ನು ನಡಿಸುತ್ತಾನೆ. ಕುರಿಗಳನ್ನು ನಡಿಸುವ ಕುರುಬನಂತೆ ಯೆಹೋವನು ತನ್ನ ಭುಜಬಲದಿಂದ ತನ್ನ ಕುರಿಗಳನ್ನು ಒಟ್ಟುಗೂಡಿಸುವನು. ಯೆಹೋವನು ಕುರಿಮರಿಗಳನ್ನು ಎತ್ತಿಕೊಂಡು ಅಪ್ಪಿಕೊಳ್ಳುವನು. ಅದರ ತಾಯಿ ಆತನ ಪಕ್ಕದಲ್ಲೇ ನಡೆಯುವವು.''

## ಪ್ರಪಂಚವನ್ನು ಸೃಷ್ಟಿಸಿದವನು ದೇವರೇ

12 ತನ್ನ ಅಂಗೈಯಿಂದ ಸಾಗರಗಳನ್ನು ಅಳತೆ ಮಾಡಿದವರ‍್ಯಾರು? ತನ್ನ ಹಸ್ತದಿಂದ ಆಕಾಶವನ್ನು ಅಳತೆ ಮಾಡಿ ದವರ‍್ಯಾರು? ಭೂಮಿಯ ದೂಳನ್ನೆಲ್ಲಾ ಒಂದು ಬೋಗುಣಿಯಲ್ಲಿ ಅಳೆದವರ‍್ಯಾರು? ಪರ್ವತಗಳನ್ನು ಮತ್ತು ಬೆಟ್ಟಗಳನ್ನು ಅಳೆಯಲು ಅಳತೆ ಕೋಲನ್ನು ಯಾರು ಉಪಯೋಗಿಸಿದರು? ಯೆಹೋವನೇ!

13 ಯೆಹೋವನ ಆತ್ಮಕ್ಕೆ ಆತನು ಮಾಡಬೇಕಾದದ್ದನ್ನು ತಿಳಿಸಿದವರು ಯಾರೂ ಇಲ್ಲ. ಆತನು ಮಾಡಿದ ಕಾರ್ಯಗಳನ್ನು ಹೀಗೆ ಮಾಡಬೇಕೆಂದು ಹೇಳಿದವರಿಲ್ಲ.

14 ಯೆಹೋವನು ಯಾರಿಂದಾದರೂ ಸಹಾಯ ಕೇಳಿದನೋ? ಯಾರಾದರೂ ಆತನಿಗೆ ನ್ಯಾಯ ನೀತಿಯನ್ನು ಕಲಿಸಿದರೋ? ಯಾರಾದರೂ ಆತನಿಗೆ ಜ್ಞಾನವನ್ನು ತಿಳಿಸಿಕೊಟ್ಟರೋ? ಯಾವನಾದರೂ ಯೆಹೋವನಿಗೆ ತಿಳುವಳಿಕೆಯನ್ನು ಹೇಳಿ

ಕೊಟ್ಟನೋ? ಇಲ್ಲ! ಯೆಹೋವನು ಸರ್ವಜ್ಞಾನಿ
ಯಾಗಿದ್ದಾನೆ.
15 ಇಗೋ, ಈ ಪ್ರಪಂಚದ ಜನಾಂಗಗಳು ಕೊಡದ
ಲ್ಲಿರುವ ಒಂದು ಹನಿ ನೀರಿನಂತಿವೆ. ದೂರದಲ್ಲಿ
ರುವ ಎಲ್ಲಾ ಜನಾಂಗಗಳನ್ನು ಯೆಹೋವನು
ಒಟ್ಟುಗೂಡಿಸಿ ತಕ್ಕಡಿಯಲ್ಲಿ ತೂಗಿದರೆ ಅವು
ಧೂಳಿನ ಕಣದಂತಿವೆ.
16 ಯೆಹೋವನಿಗೆ ಲೆಬನೋನಿನಲ್ಲಿರುವ ಮರಗಳ
ನ್ನೆಲ್ಲಾ ಸುಟ್ಟರೂ ಸಾಲದು, ಲೆಬನೋನಿನಲ್ಲಿರುವ
ಪ್ರಾಣಿಗಳು ಆತನ ಯಜ್ಞಕ್ಕೆ ಸಾಲವು.
17 ಲೋಕದ ಜನಾಂಗದವರೆಲ್ಲರೂ ಯೆಹೋವ
ನೆದುರು ಏನೂ ಅಲ್ಲ. ಯೆಹೋವನೆದುರು ಎಲ್ಲಾ
ಜನಾಂಗದವರು ಏನೂ ಅಲ್ಲ.

## ದೇವರ ರೂಪವು ಜನರಿಗೆ ತಿಳಿಯದು

18 ದೇವರನ್ನು ಬೇರೆ ಯಾವುದಕ್ಕಾದರೂ ಹೋಲಿಸ
ಬಹುದೇ? ಇಲ್ಲ! ದೇವರ ಚಿತ್ರವನ್ನು ಬರೆಯ
ಬಹುದೇ? ಇಲ್ಲ!
19 ಆದರೆ ಕೆಲವರು ವಿಗ್ರಹಗಳನ್ನು ಕಲ್ಲಿನಿಂದ ಅಥವಾ
ಮರದಿಂದ ತಯಾರಿಸುತ್ತಾರೆ. ಅವುಗಳನ್ನು ಅವರು
ದೇವರು ಎಂದು ಕರೆಯುತ್ತಾರೆ. ಒಬ್ಬನು ಒಂದು
ವಿಗ್ರಹವನ್ನು ಮಾಡುತ್ತಾನೆ. ಇನ್ನೊಬ್ಬನು ಅದಕ್ಕೆ
ಬಂಗಾರದ ತಗಡನ್ನು ಹೊದಿಸುತ್ತಾನೆ, ಮತ್ತು ಬೆಳ್ಳಿ
ಹಾರವನ್ನು ಮಾಡಿ ಹಾಕುತ್ತಾನೆ.
20 ಅದರ ಪೀಠಕ್ಕಾಗಿ ವಿಶೇಷ ಜಾತಿಯ ಮರವನ್ನು
ಆರಿಸುವನು. ಈ ಬಗೆಯ ಮರವು ಕೊಳೆತು
ಹೋಗುವದಿಲ್ಲ. ಆ ಬಳಿಕ ಅವನು ಒಳ್ಳೆಯ ಬಡಗಿ
ಯನ್ನು ನೇಮಿಸುವನು. ಆ ಬಡಗಿಯು ವಿಗ್ರಹ
ನಿಲ್ಲಿಸಿದಾಗ ಅದು ಪಕ್ಕಕ್ಕೆ ವಾಲಿ ಬೀಳದಂತೆ
ಮಾಡುವನು.
21 ಈ ವಿಷಯಗಳನ್ನೆಲ್ಲಾ ನೀವು ಸರಿಯಾಗಿ ತಿಳಿದಿದ್ದೀ
ರಲ್ಲವೆ? ಇದರ ವಿಚಾರವಾಗಿ ನೀವು ಕೇಳಿರುವಿರಿ.
ಎಷ್ಟೋ ವರುಷಗಳ ಹಿಂದೆ ಯಾರೋ ನಿಮಗೆ
ಹೇಳಿದ್ದಿರಬಹುದು. ಖಂಡಿತವಾಗಿಯೂ ಭೂಮಿ
ಯನ್ನು ಯಾರು ನಿರ್ಮಿಸಿದ್ದಾರೆಂದು ನೀವು
ತಿಳಿದಿರುವಿರಿ.
22 ಯೆಹೋವನು ಸತ್ಯವಾದ ದೇವರು. ಆತನು ಉನ್ನತ
ವಾದ ಆಕಾಶದಲ್ಲಿ ಕುಳಿತುಕೊಳ್ಳುವನು. ಆತನಿಗೆ
ಹೋಲಿಸಿದರೆ ಜನರು ಮಿಡತೆಗಳಂತಿರುವರು.
ಆತನು ಬಟ್ಟೆಯಂತೆ ಆಕಾಶವನ್ನು ಸುರುಳಿಯಾಗಿ
ಸುತ್ತುವನು. ಆಕಾಶವನ್ನು ಆತನು ಎಳೆದು ಗುಡಾರ
ದಂತೆ ಅಗಲಮಾಡಿ ಅದರಡಿಯಲ್ಲಿ ಕುಳಿತು
ಕೊಳ್ಳುವನು.
23 ಆತನು ಅಧಿಪತಿಗಳನ್ನು ಅಯೋಗ್ಯರನ್ನಾಗಿ ಮಾಡು
ವನು. ಆತನು ಲೋಕದ ನ್ಯಾಯಾಧೀಶರನ್ನು
ನಿಷ್ಪ್ರಯೋಜಕರನ್ನಾಗಿ ಮಾಡುವನು.
24 ಆ ಅರಸುಗಳು ನೆಲದಲ್ಲಿ ನೆಟ್ಟಿರುವ ಸಸಿಗಳಂತಿರು
ವರು. ಅವುಗಳ ಬೇರುಗಳು ನೆಲದೊಳಗೆ ಆಳವಾಗಿ
ಹೋಗುವ ಮೊದಲೇ ದೇವರ ಉಸಿರಿಗೆ ಅವು
ಬಾಡಿ ಸಾಯುವವು; ಗಾಳಿಯು ಭತ್ತದ ಒಣಹುಲ್ಲಿ
ನಂತೆ ಅವುಗಳನ್ನು ಹಾರಿಸಿ ಬಿಡುವದು.
25 ಪರಿಶುದ್ಧನಾದ ದೇವರು ಹೇಳುವದೇನೆಂದರೆ:
‘‘ನನ್ನನ್ನು ಯಾರಿಗಾದರೂ ಹೋಲಿಸಲು
ಸಾಧ್ಯವೇ? ಇಲ್ಲ! ನನಗೆ ಸಮಾನರು ಯಾರೂ
ಇಲ್ಲ.
26 ಆಕಾಶದ ಕಡೆಗೆ ನೋಡಿರಿ! ಆ ನಕ್ಷತ್ರಗಳನ್ನೆಲ್ಲಾ
ಮಾಡಿದವರು ಯಾರು? ಆಕಾಶದಲ್ಲಿರುವ ಆ ಸೈನ್ಯ
ಗಳನ್ನು ಸಿದ್ಧಮಾಡಿದವರು ಯಾರು? ಪ್ರತಿ
ಯೊಂದು ನಕ್ಷತ್ರವನ್ನು ಹೆಸರೆತ್ತಿ ಕರೆಯುವವರು
ಯಾರು? ಸತ್ಯಸ್ವರೂಪನಾದ ದೇವರು ಬಲಿಷ್ಠನೂ
ಪರಾಕ್ರಮಶಾಲಿಯೂ ಆಗಿದ್ದಾನೆ. ಆದುದರಿಂದ
ಆ ನಕ್ಷತ್ರಗಳಲ್ಲಿ ಒಂದೂ ನಾಶವಾಗಲಿಲ್ಲ.’’

27 ಯಾಕೋಬೇ, ಇದು ಸತ್ಯ! ಇಸ್ರೇಲೇ ನೀನದನ್ನು
ನಂಬಬೇಕು. ಹೀಗಿರಲು ನೀನು, ‘‘ಯೆಹೋವನು
ನನ್ನ ನಡತೆಯನ್ನು ಗಮನಿಸುವದಿಲ್ಲ. ನನ್ನನ್ನು
ಕಂಡುಹಿಡಿದು ಶಿಕ್ಷಿಸುವದಿಲ್ಲ’’ ಎಂದು ಹೇಳುವೆ.
28 ದೇವರಾದ ಯೆಹೋವನು ಜ್ಞಾನಿಯೆಂಬುದನ್ನು
ನೀನು ಖಂಡಿತವಾಗಿಯೂ ಕೇಳಿರುವೆ. ಆತನು ತಿಳಿ
ದಿರುವ ಪ್ರತಿಯೊಂದನ್ನೂ ಕಲಿತುಕೊಳ್ಳಲು ಜನ
ರಿಗೆ ಸಾಧ್ಯವಿಲ್ಲ. ಆತನು ಆಯಾಸಗೊಳ್ಳುವದಿಲ್ಲ;
ಆತನಿಗೆ ವಿಶ್ರಾಂತಿಯ ಅವಶ್ಯವಿಲ್ಲ. ಭೂಮಿಯಲ್ಲಿ
ರುವ ದೂರ ಸ್ಥಳಗಳನ್ನೆಲ್ಲಾ ಮಾಡಿದವನು ಆತನೇ.
ಆತನು ನಿರಂತರಕ್ಕೂ ಜೀವಿಸುವಾತನಾಗಿದ್ದಾನೆ.
29 ಬಳಲಿಹೋದವರನ್ನು ಆತನು ಬಲಶಾಲಿಗಳನ್ನಾಗಿ
ಮಾಡುತ್ತಾನೆ. ಬಲಹೀನರನ್ನು ಶಕ್ತಿವಂತರನ್ನಾಗಿ
ಮಾಡುತ್ತಾನೆ.
30 ಯೌವನಸ್ಥರು ಆಯಾಸಗೊಳ್ಳುವರು. ಅವರಿಗೆ
ವಿಶ್ರಾಂತಿ ಬೇಕು; ಹುಡುಗರೂ ಮುಗ್ಗರಿಸಿ
ಬೀಳುವರು.
31 ಆದರೆ ಯೆಹೋವನಲ್ಲಿ ಭರವಸೆವಿಟ್ಟವರು ಮತ್ತೆ
ಬಲಹೊಂದುವರು. ಹದ್ದು ಹೊಸಗರಿಗಳನ್ನು
ಹೊಂದುವಂತೆ ಅವರು ಹೊಸ ಬಲವನ್ನು

ಹೊಂದುವರು. ಅವರು ಓಡಾಡಿದರೂ ಆಯಾಸ
ಗೊಳ್ಳುವದಿಲ್ಲ. ನಡೆದಾಡಿದರೂ ಬಳಲಿ ಹೋಗ
ವುದಿಲ್ಲ.''

### ನಿರ್ಮಾಪಕನಾದ ಯೆಹೋವನು ನಿರಂತರವೂ ಜೀವಿಸುವನು

41 ಯೆಹೋವನು ಹೇಳುವದೇನೆಂದರೆ:
''ಬಹುದೂರದಲ್ಲಿರುವ ಜನಾಂಗಗಳ
ವರೇ, ಮೌನವಾಗಿದ್ದು ನನ್ನ ಬಳಿಗೆ ಬನ್ನಿರಿ.
ಜನಾಂಗಗಳೇ, ಮತ್ತೆ ಬಲಿಷ್ಠರಾಗಿರಿ. ನನ್ನ ಬಳಿಗೆ
ಬಂದು ನನ್ನೊಂದಿಗೆ ಮಾತಾಡಿರಿ. ನಾವು ಒಟ್ಟಾಗಿ
ಸೇರಿ ಬಂದು ಯಾರು ಸರಿ ಎಂದು ವಾದಿಸೋಣ!
2 ಈ ಪ್ರಶ್ನೆಗಳಿಗೆ ಉತ್ತರಿಸಿರಿ: ಪೂರ್ವದಿಕ್ಕಿನಿಂದ
ಬರುವ ಮನುಷ್ಯನನ್ನು ಎಚ್ಚರಿಸಿದವರು ಯಾರು?
ಅವನು ಒಳ್ಳೆಯತನವನ್ನು ತನ್ನೊಂದಿಗಿರಲು ಕೇಳು
ತ್ತಾನೆ. ತನ್ನ ಖಡ್ಗವನ್ನು ಉಪಯೋಗಿಸಿ ಜನಾಂಗ
ಗಳನ್ನು ಸೋಲಿಸುವನು. ಅವರನ್ನು ದೂಳಿನಂತೆ
ಮಾಡುವನು. ತನ್ನ ಬಿಲ್ಲನ್ನು ಉಪಯೋಗಿಸಿ ರಾಜ
ರನ್ನು ವಶಪಡಿಸಿಕೊಳ್ಳುತ್ತಾನೆ. ಅವರು ಗಾಳಿಯಲ್ಲಿ
ತೂರಾಡುವ ಹುಲ್ಲಿನಂತೆ ಓಡಿ ಹೋಗುವರು.
3 ಅವನು ಸೈನ್ಯವನ್ನು ಓಡಿಸಿದರೂ ಗಾಯಗೊಳ್ಳುವ
ದಿಲ್ಲ. ತಾನು ಹಿಂದೆಂದೂ ಹೋಗದ ಸ್ಥಳಗಳಿಗೆ
ಹೋಗುವನು.
4 ಇವೆಲ್ಲಾ ನೆರವೇರುವಂತೆ ಮಾಡಿದವರು ಯಾರು?
ಆದಿಯಿಂದ ಎಲ್ಲಾ ಜನರನ್ನು ಕರೆದವರು
ಯಾರು? ಯೆಹೋವನೆಂಬ ನಾನೇ ಇವೆಲ್ಲವನ್ನು
ಮಾಡಿದೆನು. ನಾನೇ ಮೊದಲನೆಯವನಾಗಿದ್ದೇನೆ.
ಅನಾದಿಕಾಲಕ್ಕಿಂತ ಮೊದಲು ನಾನಿದ್ದೆನು.
ಎಲ್ಲವೂ ಅಂತ್ಯವಾಗುವ ತನಕ ನಾನು ಇರುತ್ತೇನೆ.
5 ದೂರಸ್ಥಳಗಳವರೇ, ನೋಡಿರಿ, ಭಯಗೊಳ್ಳಿರಿ.
ಭೂಮಿಯ ಕಟ್ಟಕಡೆಗಿರುವ ದೇಶಗಳೇ, ಭಯ
ದಿಂದ ನಡುಗಿರಿ. ನನ್ನ ಬಳಿಗೆ ಬಂದು ನನ್ನ ಮಾತನ್ನು
ಕೇಳಿರಿ.'' ಆಗ ಅವರು ಬಂದರು.

6''ಕೆಲಸಗಾರರು ಒಬ್ಬರಿಗೊಬ್ಬರು ಸಹಾಯ ಮಾಡು
ವರು. ಅವರು ಬಲಶಾಲಿಗಳಾಗಬೇಕೆಂದು ಪರಸ್ಪರ
ಪ್ರೋತ್ಸಾಹಿಸುವರು. 7ಒಬ್ಬ ಕೆಲಸಗಾರನು ಮರವನ್ನು
ಕಡಿದು ಅದರಿಂದ ವಿಗ್ರಹವನ್ನು ಮಾಡುವನು. ಅವನು
ಬಂಗಾರದ ಕೆಲಸದವನನ್ನು ಪ್ರೋತ್ಸಾಹಿಸುವನು. ಇನ್ನೊ
ಬ್ಬನು ತನ್ನ ಸುತ್ತಿಗೆಯಿಂದ ತಗಡನ್ನು ಸಮತಟ್ಟು ಮಾಡು
ವನು. ಅವನು ಕಬ್ಬಿಣದ ಕೆಲಸದವನನ್ನು ಪ್ರೋತ್ಸಾಹಿಸು
ವನು. ಈ ಕೆಲಸದವನು 'ಇದು ಒಳ್ಳೆಯ ಕೆಲಸ. ತಗಡು
ಹೊರಗೆ ಬರಲಾರದು' ಎಂದು ಹೇಳಿ ಆ ವಿಗ್ರಹವನ್ನು
ಪೀಠಕ್ಕೆ ಮೊಳೆ ಹೊಡೆದು ಭದ್ರ ಪಡಿಸುವನು. ಈಗ
ವಿಗ್ರಹವು ಅಲ್ಲಾಡುವದಿಲ್ಲ, ಕೆಳಕ್ಕೆ ಬೀಳುವದಿಲ್ಲ.''

### ಯೆಹೋವನೊಬ್ಬನೇ ನಮ್ಮನ್ನು ರಕ್ಷಿಸುವನು

8ಯೆಹೋವನು ಇಂತೆನ್ನುತ್ತಾನೆ,

''ಇಸ್ರೇಲೇ, ನೀನು ನನ್ನ ಸೇವಕನಾಗಿರುವೆ.
ಯಾಕೋಬೇ, ನಾನು ನಿನ್ನನ್ನು ಆರಿಸಿಕೊಂಡೆನು.
ನೀನು ಅಬ್ರಹಾಮನ ಕುಟುಂಬದವನಾಗಿರುವೆ.
ನಾನು ಅವನನ್ನು ಪ್ರೀತಿಸಿದ್ದೆನು.
9 ನೀನು ದೂರದೇಶದಲ್ಲಿದ್ದೆ. ಆದರೆ ಕೈಚಾಚಿ ಆ
ದೇಶದಿಂದ ನಿನ್ನನ್ನು ಕರೆದೆನು. 'ನೀನು ನನ್ನ
ಸೇವಕ' ಎಂದು ಹೇಳಿದೆನು. ನಾನು ನಿನ್ನನ್ನು ಆರಿಸಿ
ಕೊಂಡೆನು. ಆದರೆ ನಿನ್ನನ್ನು ತಳ್ಳಿಬಿಡಲಿಲ್ಲ.
10 ನಾನೇ ನಿನ್ನ ಸಂಗಡವಿದ್ದೇನೆ. ಆದುದರಿಂದ ಚಿಂತಿ
ಸದಿರು. ನಾನೇ ನಿನ್ನ ದೇವರು, ಆದುದರಿಂದ
ಭಯಪಡಬೇಡ. ನಿನ್ನನ್ನು ಬಲಪಡಿಸುವೆನು. ನಿನಗೆ
ಸಹಾಯ ಮಾಡುವೆನು. ನನ್ನ ಒಳ್ಳೆಯ ಬಲಗೈ
ಯಿಂದ ನಿನಗೆ ಆಧಾರ ಕೊಡುವೆನು.
11 ನೋಡು, ಕೆಲವರು ನಿನ್ನ ಮೇಲೆ ಕೋಪಗೊಂಡಿ
ದ್ದಾರೆ. ಆದರೆ ಅವರು ನಾಚಿಕೆಪಡುವರು. ನಿನ್ನ
ಶತ್ರುಗಳು ಕಳೆದುಹೋಗಿ ಕಾಣದೆ ಹೋಗುವರು.
12 ನಿನಗೆ ವಿರುದ್ಧವಾಗಿದ್ದ ಜನರನ್ನು ನೀನು ಹುಡು
ಕುವೆ. ಆದರೆ ಅವರು ನಿನಗೆ ಕಾಣಿಸುವುದಿಲ್ಲ. ನಿನ್ನ
ವಿರುದ್ಧವಾಗಿ ಯುದ್ಧ ಮಾಡಿದವರು ಕಾಣದೆ
ಹೋಗುವರು.
13 ನಿಮ್ಮ ದೇವರಾದ ಯೆಹೋವನು ನಾನೇ. ನಾನು
ನಿನ್ನ ಬಲಗೈಯನ್ನು ಹಿಡಿದಿದ್ದೇನೆ. ನೀನು ಹೆದರ
ಬೇಡ, ನಾನೇ ನಿನಗೆ ಸಹಾಯ ಮಾಡುತ್ತೇನೆ
ಎಂದು ಹೇಳುತ್ತಿದ್ದೇನೆ.
14 ನನಗೆ ಅಮೂಲ್ಯವಾದ ಯೆಹೂದವೇ, ಭಯಪಡ
ಬೇಡ. ನನ್ನ ಪ್ರಿಯ ಇಸ್ರೇಲೇ, ಹೆದರಬೇಡ. ನಾನು
ನಿಜವಾಗಿಯೂ ನಿಮಗೆ ಸಹಾಯ ಮಾಡು ತ್ತೇನೆ,''
ಇದು ಯೆಹೋವನ ನುಡಿ. ಇಸ್ರೇಲರ ಪರಿಶು
ದ್ಧನೂ ನಿಮ್ಮನ್ನು ರಕ್ಷಿಸುವಾತನೂ ಈ ಮಾತು
ಗಳನ್ನು ಹೇಳಿದ್ದಾನೆ:
15 ''ಇಗೋ, ನಾನು ನಿನ್ನನ್ನು ಹೊಸ ಹಂತಿಕುಂಟೆಯ
ನ್ನಾಗಿ ಮಾಡಿದ್ದೇನೆ. ಅದಕ್ಕೆ ಅನೇಕ ಹರಿತವಾದ
ಹಲ್ಲುಗಳಿವೆ. ಬೇಸಾಯಗಾರರು ಧಾನ್ಯವನ್ನು
ಹುಲ್ಲಿನಿಂದ ಪ್ರತ್ಯೇಕಿಸುವದಕ್ಕಾಗಿ ಅದನ್ನು ಉಪ
ಯೋಗಿಸುವರು. ನೀವು ಬೆಟ್ಟದ ಶಿಖರಗಳಲ್ಲಿ

ತುಳಿದಾಡಿ ಅದನ್ನು ಪುಡಿ ಮಾಡುವಿರಿ. ಆ ಬೆಟ್ಟಗಳನ್ನು ನೀವು ಕುಂಟೆಯಂತೆ ಮಾಡುವಿರಿ.
16 ನೀವು ಅವುಗಳನ್ನು ಗಾಳಿಗೆ ತೂರಿಬಿಡುವಿರಿ. ಗಾಳಿಯು ಅವುಗಳನ್ನು ಹಾರಿಸಿ ಚದರಿಸಿ ಬಿಡುವುದು. ಆಗ ನೀವು ಯೆಹೋವನಲ್ಲಿ ಸಂತಸ ಪಡುವಿರಿ. ಇಸ್ರೇಲರ ಪರಿಶುದ್ಧನಲ್ಲಿ ಹೆಚ್ಚಳ ಪಡುವಿರಿ.
17 ಬಡಜನರು ನೀರಿಗಾಗಿ ಹುಡುಕಾಡುವರು. ಆದರೆ ಅದು ಅವರಿಗೆ ದೊರಕುವದಿಲ್ಲ. ಅವರು ದಾಹಗೊಂಡಿದ್ದಾರೆ, ಅವರ ನಾಲಿಗೆ ಒಣಗಿಹೋಗಿದೆ. ನಾನು ಅವರ ಮೊರೆಯನ್ನು ಕೇಳುವೆನು. ನಾನು ಅವರನ್ನು ತೊರೆಯುವುದಿಲ್ಲ, ಅವರನ್ನು ಸಾಯಲು ಬಿಡುವುದಿಲ್ಲ.
18 ಒಣಬೆಟ್ಟಗಳಲ್ಲಿ ನದಿಗಳು ಹರಿಯುವಂತೆ ನಾನು ಮಾಡುವೆನು. ಕಣಿವೆಗಳ ಮೂಲಕ ಬುಗ್ಗೆಯ ನೀರು ಹರಿಯುವಂತೆ ಮಾಡುವೆನು. ಮರುಭೂಮಿಯನ್ನು ಸರೋವರವನ್ನಾಗಿ ಮಾಡುವೆನು. ಆ ಒಣನೆಲದಲ್ಲಿ ನೀರಿನ ಬುಗ್ಗೆಗಳು ಕಾಣುವವು.
19 ಮರುಭೂಮಿಯ ಮೇಲೆ ಮರಗಳು ಬೆಳೆಯುವವು. ಅಲ್ಲಿ ದೇವದಾರು, ಆಲೀವ್, ಕಸ್ತೂರಿ, ಜಾಲಿ, ತುರಾಯಿ, ತಿಲಕ ವೃಕ್ಷಗಳು ಇರುವವು.
20 ಜನರು ಇವುಗಳನ್ನು ನೋಡಿ, ಇವು ಯೆಹೋವನ ಶಕ್ತಿಯಿಂದ ಆದವು ಎಂದು ತಿಳಿದುಕೊಳ್ಳುವರು. ಜನರು ಈ ಸಂಗತಿಗಳನ್ನು ನೋಡಿ ಇಸ್ರೇಲರ ಪರಿಶುದ್ಧನಾದ ಯೆಹೋವನೇ ಇವುಗಳನ್ನು ಮಾಡಿದನೆಂದು ತಿಳಿದುಕೊಳ್ಳುವರು. ''

### ಸುಳ್ಳುದೇವರಿಗೆ ಯೆಹೋವನ ಸವಾಲು

21 ಯಾಕೋಬನ ಅರಸನಾದ ಯೆಹೋವನು ಹೇಳುವ
ದೇನೆಂದರೆ: ''ಬನ್ನಿ ವಾದಮಾಡೋಣ, ನಿಮ್ಮ ಆಧಾರ
ಗಳನ್ನು ತೋರಿಸಿರಿ. 22 ನಿಮ್ಮ ವಿಗ್ರಹಗಳು ನಮ್ಮ ಬಳಿಗೆ
ಬಂದು ನಡೆಯುತ್ತಿರುವುದನ್ನು ತಿಳಿಸಲಿ.

''ಪ್ರಾರಂಭದಲ್ಲಿ ನಡೆದಿದ್ದೇನು? ಮುಂದೆ ನಡೆಯಲಿ
ರುವುದೇನು? ನಮಗೆ ತಿಳಿಸಿರಿ. ನಾವು ಸೂಕ್ಷ್ಮವಾಗಿ ಕೇಳಿ
ಭವಿಷ್ಯವನ್ನು ತಿಳಿದುಕೊಳ್ಳುವೆವು. 23 ಮುಂದೆ ಸಂಭವಿಸು
ವುದನ್ನು ತಿಳಿದುಕೊಳ್ಳಲು ನಾವು ಯಾವ ಸೂಚನೆಗಳಿ
ಗಾಗಿ ಎದುರುನೋಡಬೇಕು? ತಿಳಿಸಿರಿ. ನೀವೇ ದೇವರು
ಗಳೆಂದು ಆಗ ನಮಗೆ ಖಚಿತವಾಗುವುದು. ಏನನ್ನಾದರೂ
ಮಾಡಿರಿ. ಯಾವದನ್ನಾದರೂ ಮಾಡಿರಿ. ಒಳ್ಳೆಯದನ್ನು,
ಕೆಟ್ಟದ್ದನ್ನು ಮಾಡಿರಿ. ಆಗ ನೀವು ಜೀವವುಳ್ಳವರೆಂದು
ತಿಳಿದು ನಿಮ್ಮನ್ನು ಹಿಂಬಾಲಿಸುವೆವು.

24 ''ಸುಳ್ಳುದೇವರುಗಳೇ, ಕೇಳಿ. ನೀವು ಶೂನ್ಯಕ್ಕಿಂತ
ಕಡಿಮೆಯಾದವರು. ನೀವು ಏನನ್ನೂ ಮಾಡಲಾರಿರಿ.
(ದೇವರ ದೃಷ್ಟಿಯಲ್ಲಿ) ತುಚ್ಛನಾದವನು ಮಾತ್ರ ನಿಮ್ಮನ್ನು
ಪೂಜಿಸುವನು.''

### ಯೆಹೋವನೊಬ್ಬನೇ ದೇವರು

25 ''ಉತ್ತರ ದಿಕ್ಕಿನಲ್ಲಿರುವ ಒಬ್ಬ ಮನುಷ್ಯನನ್ನು ನಾನು ಎಚ್ಚರಪಡಿಸಿದೆನು. ಅವನು ಪೂರ್ವದಿಕ್ಕಿನಿಂದ ಬರುವನು. ನನ್ನ ನಾಮವನ್ನು ಅವನು ಆರಾಧಿಸುವನು. ಕುಂಬಾರನು ಆವೆಮಣ್ಣನ್ನು ತುಳಿದು ಹದಗೊಳಿಸುವಂತೆ ಅವನು ಅರಸರುಗಳ ಮೇಲೆ ತುಳಿದಾಡುವನು.''
26 ಇವುಗಳು ಸಂಭವಿಸುವ ಮೊದಲೇ ಇವುಗಳನ್ನು ತಿಳಿಸಿದಾತನನ್ನೇ ದೇವರೆಂದು ಕರೆಯಬೇಕು. ನಿಮ್ಮ ವಿಗ್ರಹಗಳಲ್ಲಿ ಯಾವದಾದರೂ ನಮಗೆ ಇದನ್ನು ತಿಳಿಸಿತೋ? ಇಲ್ಲ! ಯಾವ ವಿಗ್ರಹವೂ ನಮಗೆ ಇವುಗಳ ವಿಷಯದಲ್ಲಿ ತಿಳಿಸಲಿಲ್ಲ. ಆ ವಿಗ್ರಹಗಳು ಒಂದು ಮಾತನ್ನಾದರೂ ಹೇಳಲಿಲ್ಲ. ಮತ್ತು ನೀವು ಹೇಳಿದ್ದನ್ನು ಆ ಸುಳ್ಳು ದೇವರುಗಳು ಕೇಳಿಸಿಕೊಳ್ಳುವದೂ ಇಲ್ಲ.
27 ಈ ವಿಷಯಗಳ ಬಗ್ಗೆ ತಿಳಿಸಿದವರಲ್ಲಿ ಯೆಹೋವನೆಂಬ ನಾನೇ ಮೊದಲನೆಯವನು. ''ನೋಡು ನಿನ್ನ ಜನರು ಹಿಂತಿರುಗಿ ಬರುತ್ತಿದ್ದಾರೆ'' ಎಂಬ ಸಂದೇಶವನ್ನು ನಾನು ಜೆರುಸಲೇಮಿಗೆ ಕಳುಹಿಸಿದೆನು.
28 ನಾನು ಆ ಸುಳ್ಳುದೇವರುಗಳನ್ನು ದೃಷ್ಟಿಸಿ ನೋಡಿದೆನು. ಅವುಗಳಲ್ಲಿ ಯಾವುದೂ ಮಾತಾಡುವಷ್ಟು ಜ್ಞಾನಿಯಾಗಿರಲಿಲ್ಲ. ನಾನು ಅವುಗಳನ್ನು ಪ್ರಶ್ನಿಸಿದೆನು. ಆದರೆ ಅವು ಉತ್ತರಿಸಲಿಲ್ಲ.
29 ಆ ದೇವರುಗಳೆಲ್ಲಾ ಶೂನ್ಯಕ್ಕಿಂತಲೂ ಕಡಿಮೆಯೇ. ಅವುಗಳು ಏನು ಮಾಡಲಾರವು. ಆ ಪ್ರತಿಮೆಗಳು ಸಂಪೂರ್ಣವಾಗಿ ಬೆಲೆಯಿಲ್ಲದವುಗಳಾಗಿವೆ. ಅವುಗಳು ಖಂಡಿತವಾಗಿಯೂ ನಿಷ್ಪ್ರಯೋಜಕವಾದವುಗಳಾಗಿವೆ.

### ಯೆಹೋವನ ವಿಶೇಷ ಸೇವಕನು

42 ''ನನ್ನ ಸೇವಕನನ್ನು ನೋಡಿರಿ! ನಾನು ಅವನಿಗೆ ಬೆಂಬಲ ನೀಡುತ್ತೇನೆ. ನಾನು ಆರಿಸಿಕೊಂಡಿದ್ದು ಅವನನ್ನೇ. ನಾನು ಅವನನ್ನು ಮೆಚ್ಚಿಕೊಂಡಿದ್ದೇನೆ. ನನ್ನ ಆತ್ಮವನ್ನು ಆತನಲ್ಲಿರಿಸುವೆನು. ಆತನು ಜನಾಂಗಗಳನ್ನು ನ್ಯಾಯವಾಗಿ ತೀರ್ಪು ಮಾಡುವನು.
2 ಆತನು ಬೀದಿಗಳಲ್ಲಿ ಗಟ್ಟಿಯಾಗಿ ಮಾತನಾಡನು, ಗಟ್ಟಿಯಾಗಿ ಕರೆಯುವದಿಲ್ಲ, ಕೂಗುವದಿಲ್ಲ.
3 ಮೃದುವಾಗಿರುವ ಆತನು ಹುಲ್ಲಿನ ಕಡ್ಡಿಯನ್ನೂ

ತುಂಡುಮಾಡುವದಿಲ್ಲ. ಕಿಡಿ ಬೆಂಕಿಯನ್ನೂ ಆತನು ಆರಿಸನು. ಆತನು ನೀತಿಯಿಂದ ನ್ಯಾಯ ವಿಚಾರಣೆ ಮಾಡಿ ಸತ್ಯವನ್ನು ಕಂಡುಕೊಳ್ಳುವನು.

4 ಲೋಕದಲ್ಲಿ ನ್ಯಾಯವನ್ನು ಸ್ಥಾಪಿಸುವತನಕ ಆತನು ಬಲಹೀನನಾಗುವದಿಲ್ಲ; ಮುಗ್ಗರಿಸುವುದೂ ಇಲ್ಲ. ದೂರದೇಶದಲ್ಲಿರುವವರು ಸಹ ಆತನ ಬೋಧನೆಯನ್ನು ನಂಬುವರು.

### ಯೆಹೋವನೇ ಸೃಷ್ಟಿಕರ್ತ ಮತ್ತು ಆಡಳಿತಗಾರ

5 ನಿಜದೇವರಾದ ಯೆಹೋವನು ಇಂತೆನ್ನುತ್ತಾನೆ: ಆಕಾಶವನ್ನು ನಿರ್ಮಿಸಿ ಅದನ್ನು ಭೂಮಿಯ ಮೇಲೆ ಹರಡಿದಾತನು ಯೆಹೋವನೇ. ಭೂಮಿಯ ಮೇಲಿರುವದನ್ನೆಲ್ಲಾ ಸೃಷ್ಟಿಸಿದಾತನು ಯೆಹೋವನೇ. ಭೂಮಿಯ ಮೇಲಿರುವ ಮನುಷ್ಯರಿಗೆಲ್ಲಾ ಜೀವಶ್ವಾಸವನ್ನು ಕೊಟ್ಟವನು ಆತನೇ. ಭೂಮಿಯ ಮೇಲೆ ನಡೆಯುವ ಪ್ರತಿಯೊಬ್ಬನಿಗೂ ಪ್ರಾಣವನ್ನು ಕೊಟ್ಟವನು ಆತನೇ.

6 ‘‘ಯೆಹೋವನೆಂಬ ನಾನು ನ್ಯಾಯವನ್ನು ಸ್ಥಾಪಿಸಲು ನಿನ್ನನ್ನು ಕರೆದೆನು. ನಾನು ನಿನ್ನ ಕೈಗಳನ್ನು ಹಿಡಿದು ಸಂರಕ್ಷಿಸುವೆನು. ಜನರೊಂದಿಗೆ ಮಾಡಿಕೊಂಡ ಒಡಂಬಡಿಕೆ ನನ್ನಲ್ಲಿದೆಯೆಂಬುದಕ್ಕೆ ನೀನು ಗುರುತಾಗಿರುವೆ. ಎಲ್ಲಾ ಜನರಿಗೆ ನೀನು ಹೊಳೆಯುವ ಪ್ರಕಾಶವಾಗಿರುವೆ.

7 ನೀನು ಕುರುಡರ ಕಣ್ಣುಗಳಿಗೆ ದೃಷ್ಟಿಯನ್ನು ಕೊಡುವೆ; ಸೆರೆಮನೆಯಲ್ಲಿರುವ ಎಷ್ಟೋ ಜನರನ್ನು ನೀನು ಬಿಡಿಸುವೆ. ಕತ್ತಲೆಯಲ್ಲಿ ವಾಸಿಸುವ ಎಷ್ಟೋ ಜನರನ್ನು ನೀನು ಸೆರೆಮನೆಯಿಂದ ಬಿಡಿಸುವೆ.

8 ನಾನೇ ಕರ್ತನು. ಯೆಹೋವನೆಂಬುದೇ ನನ್ನ ಹೆಸರು. ನನ್ನ ಮಹಿಮೆಯನ್ನು ನಾನು ಇತರರಿಗೆ ಕೊಡೆನು. ನನಗೆ ಸಲ್ಲತಕ್ಕ ಮಹಿಮೆಯನ್ನು ಸುಳ್ಳುದೇವರ ವಿಗ್ರಹಗಳಿಗೆ ಬಿಟ್ಟುಕೊಡೆನು.

9 ಆದಿಯಲ್ಲಿಯೇ ಮುಂದಿನ ಸಂಗತಿಗಳನ್ನು ತಿಳಿಸಿದೆನು. ಅವೆಲ್ಲವೂ ಸಂಭವಿಸಿದವು. ಈಗ ಕೆಲವು ವಿಷಯಗಳು ನಿನಗೆ ಪ್ರಕಟಿಸುತ್ತೇನೆ; ಸಂಭವಿಸುವ ಮೊದಲೇ ಅವುಗಳನ್ನು ನಿನಗೆ ತಿಳಿಸುವೆನು.’’

### ದೇವರಿಗೆ ಸ್ತೋತ್ರಗಾನ

10 ದೂರದೇಶಗಳಲ್ಲಿರುವ ಜನರೇ, ಯೆಹೋವನಿಗೆ ಹೊಸ ಗೀತೆಯನ್ನು ಹಾಡಿರಿ. ಸಾಗರಗಳಲ್ಲಿ ಪ್ರಯಾಣಿಸುವ ಜನರೆಲ್ಲರೂ ಸಮುದ್ರ ಜೀವಿಗಳೆಲ್ಲವೂ ದೂರದೇಶಗಳವರೆಲ್ಲರೂ ದೇವರಿಗೆ ಸ್ತೋತ್ರ ಮಾಡಲಿ.

11 ಮರುಭೂಮಿಗಳೂ ನಗರಗಳೂ ಕೇದಾರಿನ ಹಳ್ಳಿಗಳೂ ಯೆಹೋವನನ್ನು ಸ್ತುತಿಸಲಿ. ಸೆಲ ಪಟ್ಟಣ ವಾಸಿಗಳೇ, ಹರ್ಷದಿಂದ ಹಾಡಿರಿ. ನಿಮ್ಮ ಪರ್ವತಗಳ ತುದಿಯಿಂದ ಗಾನ ಮಾಡಿರಿ.

12 ಯೆಹೋವನನ್ನು ಘನಪಡಿಸಿರಿ. ದೂರದೇಶಗಳ ಜನರೆಲ್ಲರೇ, ಆತನನ್ನು ಸ್ತುತಿಸಿರಿ.

13 ಯೆಹೋವನು ಯುದ್ಧವೀರನಂತೆ ಹೊರಡುವನು. ಆತನು ಯುದ್ಧಮಾಡಲು ತಯಾರಾಗಿರುವ ಶೂರನಂತಿದ್ದಾನೆ. ಆತನು ಉತ್ಸಾಹದಿಂದ ಗಟ್ಟಿಯಾಗಿ ಕೂಗುತ್ತಾ ತನ್ನ ವೈರಿಗಳನ್ನು ಸೋಲಿಸುವನು.

### ದೇವರು ತಾಳ್ಮೆಯುಳ್ಳವನಾಗಿದ್ದಾನೆ

14 ‘‘ನಾನು ಬಹುಕಾಲದಿಂದ ಮೌನವಾಗಿದ್ದೆನು. ನಾನು ಏನೂ ಹೇಳದ ಹಾಗೆ ನನ್ನನ್ನು ನಿಯಂತ್ರಿಸಿಕೊಂಡಿದ್ದೆನು. ಈಗ ನಾನು ಹೆರಿಗೆ ಬೇನೆಯನ್ನು ಅನುಭವಿಸುವ ಹೆಂಗಸಿನಂತೆ ಕಿರುಚುವೆನು; ಗಟ್ಟಿಯಾಗಿ ಆರೆಉಸಿರಾಡುವೆನು.

15 ಬೆಟ್ಟಗಳನ್ನೂ ಪರ್ವತಗಳನ್ನೂ ನಾಶಪಡಿಸುವೆನು. ಅಲ್ಲಿ ಬೆಳೆಯುವ ಸಸ್ಯಗಳನ್ನೆಲ್ಲಾ ಒಣಗಿಸಿ ಬಿಡುವೆನು. ನದಿಗಳನ್ನು ಒಣನೆಲವನ್ನಾಗಿ ಮಾರ್ಪಡಿಸುವೆನು; ನೀರಿನ ಹಳ್ಳಗಳನ್ನು ಒಣಗಿಸಿ ಬಿಡುವೆನು

16 ಅವರು ಹಿಂದೆಂದೂ ತಿಳಿಯದ ರೀತಿಯಲ್ಲಿ ನಾನು ಕುರುಡರನ್ನು ನಡೆಸುವೆನು. ಕುರುಡರು ಹೋಗಿರದ ಸ್ಥಳಕ್ಕೆ ನಾನು ಅವರನ್ನು ನಡಿಸುವೆನು. ನಾನು ಅವರಿಗಾಗಿ ಕತ್ತಲೆಯನ್ನು ಬೆಳಕಾಗಿ ಮಾರ್ಪಡಿಸುವೆನು. ನಾನು ಕೊರಕಲು ನೆಲವನ್ನು ಸಮತಟ್ಟಾಗಿ ಮಾಡುವೆನು. ನಾನು ಮಾಡಿದ ವಾಗ್ದಾನವನ್ನು ನೆರವೇರಿಸುವೆನು. ನನ್ನ ಜನರನ್ನು ನಾನು ಎಂದಿಗೂ ತೊರೆಯುವದಿಲ್ಲ.

17 ಆದರೆ ಕೆಲವರು ನನ್ನನ್ನು ಹಿಂಬಾಲಿಸುವದನ್ನು ನಿಲ್ಲಿಸಿಬಿಟ್ಟಿದ್ದಾರೆ. ಅವರ ಬಳಿಯಲ್ಲಿ ಬಂಗಾರದ ತಗಡಿನಿಂದ ಹೊದಿಸಿದ ವಿಗ್ರಹಗಳಿವೆ. ಅವರು ಆ ವಿಗ್ರಹಗಳಿಗೆ, ‘ನೀನೇ ನಮ್ಮ ದೇವರು’ ಎಂದು ಹೇಳುವರು. ಸುಳ್ಳುದೇವರುಗಳನ್ನು ಅವರು ಅವಲಂಬಿಸಿರುವದರಿಂದ ನಿರಾಶರಾಗುವರು.’’

### ದೇವರಿಗೆ ವಿಧೇಯರಾಗಲು ಇಸ್ರೇಲರು ನಿರಾಕರಿಸಿದರು

18 ‘‘ಕಿವುಡರೇ, ನನ್ನ ಮಾತನ್ನು ಕೇಳಿರಿ. ಕುರುಡರೇ ನನ್ನ ಕಡೆಗೆ ನೋಡಿರಿ.

19 ಈ ಲೋಕದಲ್ಲೇ ನನ್ನ ಸೇವಕನು ಪೂರ್ಣ ಕುರುಡ ನಾಗಿದ್ದಾನೆ. ಈ ಲೋಕದಲ್ಲೇ ನನ್ನ ದೂತನು ಪೂರ್ಣಕಿವುಡನಾಗಿದ್ದಾನೆ. ನಾನು ಒಡಂಬಡಿಕೆ ಮಾಡಿಕೊಂಡ ನನ್ನ ಸೇವಕನು ಪೂರ್ಣ ಕುರುಡ ನಾಗಿದ್ದಾನೆ.

20 ತಾನು ಮಾಡತಕ್ಕದ್ದನ್ನು ಕಣ್ಣಾರೆಕಂಡರೂ ಅವನು ನನಗೆ ವಿಧೇಯನಾಗುವುದಿಲ್ಲ. ಅವನು ಕಿವಿಯಾರೆ ಕೇಳಿದರೂ ನನ್ನ ಮಾತುಗಳಿಗೆ ವಿಧೇಯನಾಗುವ ದಿಲ್ಲ; ಅದನ್ನು ಕೇಳಿಸಿಕೊಳ್ಳುವದೂ ಇಲ್ಲ.''

21 ತನ್ನ ಸೇವಕನು ನೀತಿವಂತನಾಗಿರಬೇಕೆಂದೂ ತನ್ನ ಉತ್ಕೃಷ್ಟವಾದ ಬೋಧನೆಯನ್ನು ಗೌರವಿಸ ಬೇಕೆಂದೂ ಯೆಹೋವನು ಬಯಸುತ್ತಾನೆ.

22 ಆದರೆ, ಜನರನ್ನು ನೋಡಿರಿ. ಅವರನ್ನು ಬೇರೆ ಯವರು ಸೋಲಿಸಿದ್ದಾರೆ. ಅವರಿಂದ ವಸ್ತುಗಳನ್ನು ದೋಚಿದ್ದಾರೆ. ತರುಣರೆಲ್ಲರೂ ಭಯಪಟ್ಟಿದ್ದಾರೆ; ಅವರನ್ನು ಸೆರೆಮನೆಯಲ್ಲಿ ಬಂಧಿಸಿದ್ದಾರೆ. ಅವ ರಿಂದ ಹಣವನ್ನು ಜನರು ಕಿತ್ತುಕೊಂಡಿದ್ದಾರೆ. ಅವರನ್ನು ರಕ್ಷಿಸಲು ಯಾರೂ ಇಲ್ಲ. ಅವರಲ್ಲಿ ಹಣ ವನ್ನು ಹಿಂದಕ್ಕೆ ಕೊಡು ಎಂದು ಹೇಳುವವರೇ ಇಲ್ಲ.''

23ನನ್ನ ಜನರಲ್ಲಿ ಯಾರಾದರೂ ದೇವರ ಮಾತನ್ನು
ಕೇಳಿದ್ದಾರೋ? ಇಲ್ಲ! ಆದರೆ ನೀವು ಆತನ ಮಾತುಗಳಿಗೆ
ಲಕ್ಷ್ಯಗೊಟ್ಟು ಕೇಳಿ ಸಂಭವಿಸಿರುವದನ್ನು ಗಮನಿಸಬೇಕು.
24ಯಾಕೋಬ್ ಮತ್ತು ಇಸ್ರೇಲ್ ಜನರಿಂದ ಅವರ
ಸಂಪತ್ತನ್ನು ದೋಚಿಕೊಳ್ಳಲು ಅವರನ್ನು ಬಿಟ್ಟವರು
ಯಾರು? ಯೆಹೋವನು ತಾನೇ ಅವರಿಗೆ ಹಾಗೆ ಮಾಡಿ
ಬಿಟ್ಟನು. ನಾವು ಆತನ ವಿರುದ್ಧವಾಗಿ ಪಾಪಮಾಡಿದೆವು.
ಆದುದರಿಂದ, ಆತನು ನಮ್ಮ ಆಸ್ತಿಯನ್ನು ದೋಚಿ
ಹೋಗುವಂತೆ ಮಾಡಿದನು. ಯೆಹೋವನು ಬಯಸಿದ
ರೀತಿಯಲ್ಲಿ ನಡೆಯಲು ಇಸ್ರೇಲರಿಗೆ ಇಷ್ಟವಿರಲಿಲ್ಲ,
ಆತನ ಬೋಧನೆಗಳಿಗೆ ಕಿವಿಗೊಡಲಿಲ್ಲ. 25ಆದುದರಿಂದ
ಯೆಹೋವನು ಅವರ ಮೇಲೆ ಕೋಪಗೊಂಡನು.
ಅವರಿಗೆ ವಿರುದ್ಧವಾಗಿ ಬಲವಾದ ಯುದ್ಧಗಳು ನಡೆಯು
ವಂತೆ ಮಾಡಿದನು. ಇಸ್ರೇಲ್ ಜನರ ಸುತ್ತಲೂ ಬೆಂಕಿಯು
ಆವರಿಸಿಕೊಂಡಿರುವಂತಿದ್ದರೂ ಅವರಿಗೆ ಅದರ ಪ್ರಜ್ಞೆ
ಯಿರಲಿಲ್ಲ. ಅವರೇ ಉರಿಯುತ್ತಿರುವಂತೆ ಅದಿತ್ತು.
ಆದರೆ ಅವರು ವಿಷಯಗಳನ್ನು ಅರ್ಥಮಾಡಿಕೊಳ್ಳಲು
ಪ್ರಯತ್ನಿಸಲಿಲ್ಲ.

### ದೇವರು ಯಾವಾಗಲೂ ತನ್ನ ಜನರೊಂದಿಗಿರುವನು

43 ಯಾಕೋಬೇ, ಯೆಹೋವನು ನಿನ್ನನ್ನು
ನಿರ್ಮಿಸಿದನು. ಇಸ್ರೇಲೇ, ಯೆಹೋವನು
ನಿನ್ನನ್ನು ನಿರ್ಮಿಸಿದನು. ಈಗ ಆತನು ಹೇಳುವದೇ
ನೆಂದರೆ: ''ಭಯಪಡಬೇಡ. ನಾನೇ ನಿನ್ನನ್ನು ರಕ್ಷಿಸಿ
ದ್ದೇನೆ. ನಾನು ನಿನಗೆ ಹೆಸರಿಟ್ಟೆನು. ನೀನು ನನ್ನವನೇ.
2ನಿನ್ನ ಕಷ್ಟಕಾಲದಲ್ಲಿ ನಾನು ನಿನ್ನೊಂದಿಗಿರುವೆನು. ನೀನು
ನದಿ ದಾಟುವಾಗ ಅಪಾಯಕ್ಕೆ ಗುರಿಯಾಗದಿರುವೆ. ಬೆಂಕಿ
ಯೊಳಗಿಂದ ನಡೆಯುವಾಗ ನಿನಗೆ ಹಾನಿಯಾಗದು.
3ಯಾಕೆಂದರೆ ಯೆಹೋವನಾದ ನಾನೇ ನಿನ್ನ ದೇವರು.
ಇಸ್ರೇಲಿನ ಪರಿಶುದ್ಧನಾದ ನಾನೇ ನಿನ್ನ ರಕ್ಷಕನು.
ಈಜಿಪ್ಟನ್ನು ನಿನ್ನ ವಿಮೋಚನೆಗೆ ಈಡು ಮಾಡಿದ್ದೇನೆ;
ನಿನ್ನನ್ನು ನನ್ನವನನ್ನಾಗಿ ಮಾಡಿಕೊಳ್ಳಲು ನಿನಗೆ ಕೂಷ್
ಮತ್ತು ಸೆಬಾ ಸೀಮೆಗಳನ್ನು ಕೊಟ್ಟೆನು. 4ನೀನು ನನಗೆ
ಅಮೂಲ್ಯನಾದುದರಿಂದ ನಾನು ನಿನ್ನನ್ನು ಗೌರವಿಸಿ
ಪ್ರೀತಿಸುವೆನು. ನೀನು ವಾಸಿಸುವಂತೆ ನಾನು ನಿನಗೆ ಎಲ್ಲಾ
ಜನರನ್ನು ಮತ್ತು ಜನಾಂಗಗಳನ್ನು ಕೊಡುವೆನು.''

### ದೇವರು ತನ್ನ ಮಕ್ಕಳನ್ನು ಮನೆಗೆ ಕರೆತರುವನು

5''ಆದುದರಿಂದ ಭಯಪಡಬೇಡ, ನಾನೇ ನಿನ್ನೊಂದಿ
ಗಿದ್ದೇನೆ. ನಾನು ನಿನ್ನ ಮಕ್ಕಳನ್ನು ಒಟ್ಟುಗೂಡಿಸಿ ನಿನ್ನ
ಬಳಿಗೆ ಕರೆತರುವೆನು. ನಾನು ಪೂರ್ವಪಶ್ಚಿಮ ದಿಕ್ಕುಗ
ಳಿಂದ ಅವರನ್ನು ಒಟ್ಟುಗೂಡಿಸುವೆನು. 6ನಾನು ಉತ್ತರಕ್ಕೆ
'ನನ್ನ ಜನರನ್ನು ಬಿಟ್ಟುಕೊಡು' ಎಂದು ಕೇಳುವೆನು.
ದಕ್ಷಿಣಕ್ಕೆ, 'ನನ್ನ ಜನರನ್ನು ಸೆರೆಮನೆಯಲ್ಲಿರಿಸಬೇಡ'
ಎಂದು ಹೇಳುವೆನು. ಬಹುದೂರದೇಶಗಳಿಂದ ನನ್ನ
ಮಕ್ಕಳನ್ನು ನನ್ನ ಬಳಿಗೆ ಕರೆದುಕೊಂಡು ಬಾ. 7ನನ್ನ
ಹೆಸರನ್ನು ಹೊಂದಿರುವ ನನ್ನ ಜನರನ್ನೆಲ್ಲಾ ನನ್ನ ಬಳಿಗೆ
ಕರೆದುಕೊಂಡು ಬಾ. ನನಗಾಗಿಯೇ ನಿರ್ಮಿಸಿದ ನನ್ನ
ಜನರನ್ನು ನನ್ನ ಬಳಿಗೆ ಕರೆದುಕೊಂಡು ಬಾ. ಅವರನ್ನು
ನಿರ್ಮಿಸಿದಾತನು ನಾನೇ, ಅವರು ನನ್ನವರೇ!''

### ಈ ಪ್ರಪಂಚದಲ್ಲಿ ಇಸ್ರೇಲ್ ದೇವರಿಗೆ ಸಾಕ್ಷಿಯಾಗಿದೆ

8''ಕಣ್ಣಿದ್ದೂ ಕುರುಡರಂತಿರುವ ಜನರನ್ನು ನನ್ನ ಬಳಿಗೆ
ಕರೆದುಕೊಂಡು ಬನ್ನಿರಿ. ಕಿವಿಯಿದ್ದೂ ಕಿವುಡರಂತಿರುವ
ಜನರನ್ನು ನನ್ನ ಬಳಿಗೆ ಕರೆದುಕೊಂಡು ಬನ್ನಿರಿ. 9ಎಲ್ಲಾ
ಜನಾಂಗದವರೂ ಎಲ್ಲಾ ಜನರೂ ಒಟ್ಟುಗೂಡಬೇಕು.
ಅವರ ಸುಳ್ಳುದೇವರಲ್ಲಿ ಒಬ್ಬನು ಆದಿಯಲ್ಲಿ ಸಂಭವಿಸಿ
ದ್ದನ್ನು ಹೇಳುವದಾಗಿದ್ದರೆ ತನ್ನ ಸಾಕ್ಷಿಗಳನ್ನು ಕರೆದು
ತರಲಿ. ಆ ಸಾಕ್ಷಿಗಳು ಸತ್ಯವನ್ನಾಡಲಿ. ಆಗ ಅವರು ಸತ್ಯ
ವಂತರೊ ಇಲ್ಲವೊ ಎಂದು ಗೊತ್ತಾಗುವದು.

10ಯೆಹೋವನು ಹೇಳುವದೇನೆಂದರೆ: ''ನೀವು ನನ್ನ
ಸಾಕ್ಷಿಗಳಾಗಿದ್ದೀರಿ. ನಾನು ಆರಿಸಿಕೊಂಡ ಸೇವಕನು
ನೀನೇ. ಜನರು ನನ್ನನ್ನು ನಂಬುವಂತೆ ನಾನು ನಿನ್ನನ್ನು

ಆರಿಸಿಕೊಂಡೆನು. ನಾನು ನಿಜ ದೇವರು ಎಂದು ನೀನು
ತಿಳಿಯಬೇಕೆಂದು ನಿನ್ನನ್ನು ಆರಿಸಿಕೊಂಡೆನು. ನಾನೇ ನಿಜ
ವಾದ ದೇವರು. ನನಗಿಂತ ಮೊದಲು ಯಾರೂ ಇರಲಿಲ್ಲ,
ಇನ್ನು ಮುಂದೆಯೂ ನನ್ನ ಹೊರತು ಯಾವ ದೇವರೂ
ಇರುವದಿಲ್ಲ. 11ನಾನೇ ದೇವರಾದ ಯೆಹೋವನು! ನನ್ನ
ಹೊರತು ಬೇರೆ ರಕ್ಷಕನಿಲ್ಲ! 12ನಾನೇ ನಿಮ್ಮೊಂದಿಗೆ
ಮಾತನಾಡಿದೆನು. ನಾನೇ ನಿಮ್ಮನ್ನು ರಕ್ಷಿಸಿದೆನು. ನಾನು
ಆ ವಿಷಯಗಳನ್ನು ನಿಮಗೆ ತಿಳಿಸಿದೆನು. ನಿಮ್ಮೊಂದಿಗೆ
ಇದ್ದಾತನು ಅಪರಿಚಿತನಾಗಿರಲಿಲ್ಲ. ನೀವು ನನ್ನ ಸಾಕ್ಷಿಗ
ಳಾಗಿದ್ದೀರಿ. ನಾನೇ ನಿಮ್ಮ ದೇವರು.’’ (ಯೆಹೋವನು
ತಾನೇ ಈ ವಿಷಯಗಳನ್ನು ಹೇಳಿದ್ದಾನೆ.) 13‘‘ನಾನು
ಯಾವಾಗಲೂ ದೇವರಾಗಿದ್ದೇನೆ. ನನ್ನ ಕಾರ್ಯವನ್ನು
ತಡೆಯಲು ಯಾರಿಗೆ ಸಾಧ್ಯ? ನನ್ನ ಬಲವಾದ ಹಸ್ತದಿಂದ
ಯಾರೂ ಬಿಡಿಸಬಲ್ಲರು?’’

14ಇಸ್ರೇಲರ ಪರಿಶುದ್ಧನೇ ನಿಮ್ಮನ್ನು ರಕ್ಷಿಸುವಾತನು.
ಯೆಹೋವನು ಹೇಳುವದೇನೆಂದರೆ: ‘‘ನಾನು ನಿಮ
ಗೋಸ್ಕರ ಬಾಬಿಲೋನಿಗೆ ಸೈನ್ಯವನ್ನು ಕಳುಹಿಸುವೆನು.
ಎಷ್ಟೋ ಮಂದಿ ಸೆರೆಹಿಡಿಯಲ್ಪಡುವರು. ಕಲ್ದೀಯ
ಜನರು ಅವರ ಹಡಗುಗಳಿಂದಲೇ ಒಯ್ಯಲ್ಪಡುವರು.
(ಅವರು ಆ ಹಡಗುಗಳ ಬಗ್ಗೆ ಬಹು ಹೆಮ್ಮೆಯಿಂದಿ
ದ್ದಾರೆ.) 15ನಾನೇ ನಿಮ್ಮ ಪರಿಶುದ್ಧನಾದ ಯೆಹೋವನು.
ನಾನು ಇಸ್ರೇಲನ್ನು ಸೃಷ್ಟಿಸಿದೆನು; ನಾನೇ ನಿಮ್ಮ
ಅರಸನು.’’

## ದೇವರು ತನ್ನ ಜನರಾದ ಇಸ್ರೇಲನ್ನು ಮತ್ತೆ ರಕ್ಷಿಸುವನು.

16ಯೆಹೋವನು ಸಮುದ್ರದ ಮೂಲಕ ಮಾರ್ಗವನ್ನು
ನಿರ್ಮಿಸುವನು. ಅಲ್ಲೋಲಕಲ್ಲೋಲವಾಗಿರುವ ನೀರಿನ
ಮೂಲಕ ತನ್ನ ಜನರಿಗೆ ಮಾರ್ಗವನ್ನು ಮಾಡುವನು.
ಯೆಹೋವನು ಹೇಳುವದೇನೆಂದರೆ, 17‘‘ನನ್ನ ವಿರುದ್ಧ
ವಾಗಿ ಯುದ್ಧ ಮಾಡುವ ಅಶ್ವದಳ, ರಥಬಲ ಮತ್ತು
ಭೂದಳವು ಸೋತುಹೋಗುವವು. ಮತ್ತೆ ಅವರು
ಏಳುವದೇ ಇಲ್ಲ. ಅವರೆಲ್ಲರೂ ನಾಶವಾಗುವರು.
ಮೇಣದ ಬತ್ತಿಯ ಬೆಂಕಿಯು ಆರಿಸಲ್ಪಡುವಂತೆಯೇ
ಅವರು ನಂದಿಸಲ್ಪಡುವರು. 18ಆದುದರಿಂದ ಆದಿಯಲ್ಲಿ
ನಡೆದ ಸಂಗತಿಗಳನ್ನು ಜ್ಞಾಪಕ ಮಾಡಿಕೊಳ್ಳಬೇಡ. ಬಹಳ
ಕಾಲದ ಹಿಂದೆ ನಡೆದ ಸಂಗತಿಗಳನ್ನು ನೆನೆಸಬೇಡ.
19ಯಾಕೆಂದರೆ, ನಾನು ಹೊಸ ಸಂಗತಿಗಳನ್ನು ಮಾಡು
ವೆನು. ನೀವು ಹೊಸ ಸಸಿಯ ರೀತಿಯಲ್ಲಿ ಬೆಳೆಯುವಿರಿ.
ಇದು ಸತ್ಯವೆಂದು ನಿಮಗೆ ಗೊತ್ತಿದೆ. ನಾನು ಮರುಭೂಮಿ
ಯಲ್ಲಿ ಖಂಡಿತವಾಗಿಯೂ ರಸ್ತೆಯನ್ನು ಮಾಡುತ್ತೇನೆ;
ಒಣನೆಲದಲ್ಲಿ ನದಿ ಹರಿಯುವಂತೆ ಮಾಡುತ್ತೇನೆ. 20ವನ್ಯ
ಜೀವಿಗಳೂ ನನಗೆ ಕೃತಜ್ಞತೆಯಿಂದ ಇರುತ್ತವೆ. ದೊಡ್ಡ
ಗಾತ್ರದ ಪ್ರಾಣಿಗಳೂ ಪಕ್ಷಿಗಳೂ ನನ್ನನ್ನು ಗೌರವಿಸು
ವವು. ನಾನು ಮರುಭೂಮಿಯಲ್ಲಿ ನೀರನ್ನು ಬರಮಾಡು
ವಾಗ ಅವು ನನ್ನನ್ನು ಗೌರವಿಸುವವು. ನಾನು ಆರಿಸಿಕೊಂಡ
ನನ್ನ ಜನರಿಗೆ ನೀರನ್ನು ಕೊಡುವುದಕ್ಕಾಗಿ ನಾನು ಇದನ್ನು
ಮಾಡುವೆನು. 21ನಾನು ನಿರ್ಮಿಸಿದ ಈ ಜನರು ನನಗೆ
ಸ್ತೋತ್ರಗಾನ ಹಾಡುವರು.

22‘‘ಯಾಕೋಬೇ, ನೀನು ನನಗೆ ಪ್ರಾರ್ಥಿಸಲಿಲ್ಲ.
ಯಾಕೆಂದರೆ ಇಸ್ರೇಲು ನನ್ನ ವಿಷಯದಲ್ಲಿ ಆಯಾಸ
ಗೊಂಡಿದೆ. 23ನಿನ್ನ ಕುರಿಗಳನ್ನು ನನ್ನ ಬಳಿಗೆ ಯಜ್ಞ
ಮಾಡುವದಕ್ಕಾಗಿ ತರಲಿಲ್ಲ. ನೀನು ನನ್ನನ್ನು ಸನ್ಮಾನಿಸ
ಲಿಲ್ಲ. ನೀನು ನನಗೆ ಬಲಿಯರ್ಪಣೆ ಮಾಡಲಿಲ್ಲ. ನೀನು
ಬಲಿಯರ್ಪಣೆ ಮಾಡಬೇಕೆಂದು ನಾನು ನಿನ್ನನ್ನು ಬಲ
ವಂತ ಪಡಿಸಲಿಲ್ಲ. ನೀನು ಆಯಾಸಗೊಳ್ಳುವ ತನಕ ಧೂಪ
ಹಾಕಬೇಕೆಂದು ನಾನು ನಿನ್ನನ್ನು ಒತ್ತಾಯಪಡಿಸಲಿಲ್ಲ.
24ನೀನು ನನ್ನ ಗೌರವಾರ್ಥವಾಗಿ ಕಾಣಿಕೆಗಳನ್ನು ಮತ್ತು
ಧೂಪವನ್ನು ಖರೀದಿ ಮಾಡಲು ನಿನ್ನ ಹಣವನ್ನು ಖರ್ಚು
ಮಾಡಲಿಲ್ಲ. ಆದರೆ ನೀನು ನನ್ನನ್ನು ನಿನ್ನ ಗುಲಾಮನಾಗು
ವಂತೆ ಬಲವಂತಪಡಿಸಿದಿ. ನೀನು ನಿನ್ನ ಪಾಪಗಳಿಂದ ನನಗೆ
ಭಾರವನ್ನುಂಟುಮಾಡಿರುವೆ ಮತ್ತು ನಿನ್ನ ಅಪರಾಧಗ
ಳಿಂದ ನನ್ನನ್ನು ಕುಗ್ಗಿಸಿರುವೆ.

25‘‘ನಿಮ್ಮ ಪಾಪಗಳನ್ನೆಲ್ಲಾ ಅಳಿಸಿಹಾಕುವಾತನು
ನಾನೇ. ನಾನು ಇದನ್ನು ನನಗೋಸ್ಕರವಾಗಿ ಮಾಡುತ್ತೇನೆ.
ನಾನು ನಿಮ್ಮ ಪಾಪಗಳನ್ನು ಜ್ಞಾಪಿಸಿಕೊಳ್ಳುವುದಿಲ್ಲ.
26ಆದರೆ ನೀನು ನನ್ನನ್ನು ಜ್ಞಾಪಿಸಿಕೊಳ್ಳಬೇಕು. ನಾವು
ಒಟ್ಟಾಗಿ ಸೇರಿ ಯಾವದು ಸರಿ ಎಂದು ನಿರ್ಧರಿಸಬೇಕು.
ನೀನು ಮಾಡಿದ್ದು ಸರಿಯಾಗಿದ್ದರೆ ರುಜುವಾತು ಮಾಡ
ಬೇಕು. 27ನಿನ್ನ ಮೊದಲನೆ ತಂದೆಯು ಪಾಪದಲ್ಲಿ
ಬಿದ್ದನು. ನಿನ್ನ ವಕೀಲರು* ನನಗೆ ವಿರುದ್ಧವಾಗಿ ಕಾರ್ಯ
ಮಾಡಿದರು. 28ಪರಿಶುದ್ಧವಾಗಿ ಆಳುವ ನಿನ್ನವರನ್ನು
ನಾನು ಅಪರಿಶುದ್ಧ ಮಾಡುವೆನು. ಯಾಕೋಬನನ್ನು
ಸಂಪೂರ್ಣವಾಗಿ ನನ್ನವನನ್ನಾಗಿ ಮಾಡುವೆನು. ಇಸ್ರೇಲಿಗೆ
ಕೆಟ್ಟ ವಿಷಯಗಳು ಸಂಭವಿಸುವವು.’’

## ಯೆಹೋವನೇ ದೇವರು

44 ಯಾಕೋಬೇ, ನೀನೇ ನನ್ನ ಸೇವಕ. ನನ್ನ
ಮಾತುಗಳನ್ನು ಕೇಳು. ಇಸ್ರೇಲೇ, ನಾನು
ನಿನ್ನನ್ನು ಆರಿಸಿಕೊಂಡಿದ್ದೇನೆ. ನಾನು ಹೇಳುವದನ್ನು
ಕೇಳು. 2ಯೆಹೋವನಾದ ನಾನೇ ನಿನ್ನನ್ನು ನಿರ್ಮಿಸಿ

---

**ವಕೀಲರು** ಬಹುಶಃ ಉಪದೇಶಕರು, ಯಾಜಕರು , ಮತ್ತು ಪ್ರವಾದಿ
ಗಳು. ಇವರು ಜನರಿಗೂ ಮತ್ತು ದೇವರಿಗೂ ಮಧ್ಯಸ್ತಗಾರರಾಗಿದ್ದರು.

ದಾತನು. ನೀನು ತಾಯಿಯ ಗರ್ಭದಲ್ಲಿರುವಾಗಲೇ
ನಾನು ನಿನಗೆ ಸಹಾಯ ಮಾಡಿದೆನು. ಯಾಕೋಬೇ, ನನ್ನ
ಸೇವಕನೇ, ಹೆದರದಿರು. ಯೆಶುರೂನೇ, (ಇಸ್ರೇಲೇ)
ನಾನು ನಿನ್ನನ್ನು ಆರಿಸಿಕೊಂಡಿದ್ದೇನೆ.
3''ಬಾಯಾರಿದ ಜನರಿಗೆ ನಾನು ನೀರು ಹೊಯ್ಯು
ವೆನು. ಬಂಜರು ಭೂಮಿಯಲ್ಲಿ ನಾನು ಹೊಳೆ ಹರಿಯು
ವಂತೆ ಮಾಡುವೆನು. ನಿನ್ನ ಸಂತಾನದ ಮೇಲೆ ನಾನು ನನ್ನ
ಆತ್ಮವನ್ನು ಸುರಿಸುವೆನು; ನಿನ್ನ ಸಂತತಿಯವರ ಮೇಲೆ ನನ್ನ
ಆಶೀರ್ವಾದವನ್ನು ಸುರಿಸುವೆನು. ಅದು ಹರಿಯುವ
ಬುಗ್ಗೆಯ ನೀರಿನಂತಿರುವುದು.
4ಅವರು ಈ ಲೋಕದ ಜನರೊಂದಿಗೆ ಬೆಳೆಯುವರು.
ಅವರು ನೀರಿನ ಕಾಲುವೆಗಳ ಬಳಿಯಲ್ಲಿ ಬೆಳೆದಿರುವ
ಮರದಂತಿರುವರು.
5''ಒಬ್ಬನು: 'ನಾನು ಯೆಹೋವನಿಗೆ ಸೇರಿದವನು'
ಎಂದು ಹೇಳುತ್ತಾನೆ. ಇನ್ನೊಬ್ಬನು ಯಾಕೋಬನ ಹೆಸ
ರನ್ನು ಬಳಸುವನು. ಮತ್ತೊಬ್ಬನು ''ನಾನು ಯೆಹೋವನ
ವನ, ಎಂದು ಸಹಿಹಾಕುವನು. ಮತ್ತೊಬ್ಬನು ನಾನು
'ಇಸ್ರೇಲನು' ಎಂಬ ಹೆಸರನ್ನು ಬಳಸಿಕೊಳ್ಳುವನು.''
6ಯೆಹೋವನು ಇಸ್ರೇಲರ ಅರಸನಾಗಿದ್ದಾನೆ. ಸರ್ವ
ಶಕ್ತನಾದ ಯೆಹೋವನು ಇಸ್ರೇಲನ್ನು ರಕ್ಷಿಸುತ್ತಾನೆ.
ಆತನು ಹೇಳುವದೇನೆಂದರೆ: ''ನಾನೊಬ್ಬನೇ ದೇವರು.
ನನ್ನ ಹೊರತು ಬೇರೆ ದೇವರುಗಳಿಲ್ಲ. ನಾನೇ ಆದಿಯೂ
ಅಂತ್ಯವೂ ಆಗಿದ್ದೇನೆ. 7ನನ್ನಂತಹ ಬೇರೆ ದೇವರುಗಳಿಲ್ಲ.
ಬೇರೆ ದೇವರುಗಳು ಇದ್ದರೆ ಅವು ಈಗ ಮಾತನಾಡಲಿ.
ಆ ದೇವರುಗಳು ಬಂದು ತಾವು ನನ್ನಂತಿರುವುದಾಗಿ
ರುಜುವಾತು ಮಾಡಲಿ. ಎಂದೆಂದಿಗೂ ಇರುವ ಈ ಜನ
ರನ್ನು ನಾನು ಸೃಷ್ಟಿಸಿದಂದಿನಿಂದ ಏನಾಯಿತೆಂಬುದನ್ನು
ನನಗೆ ತಿಳಿಸಬೇಕು. ಆ ದೇವರು ಮುಂದೆ ಸಂಭವಿಸಲಿಕ್ಕಿ
ರುವ ವಿಷಯಗಳನ್ನು ತಿಳಿಸಬೇಕು. 8ನೀವು ಭಯಪಡ
ಬೇಡಿ, ಚಿಂತಿಸಬೇಡಿ. ನಾನು ಭವಿಷ್ಯದ ಸಂಭವಗಳನ್ನು
ಯಾವಾಗಲೂ ನಿಮಗೆ ತಿಳಿಸುತ್ತಾ ಬಂದಿದ್ದೇನೆ. ನೀವೇ
ನನ್ನ ಸಾಕ್ಷಿಗಳು. ನನ್ನ ಹೊರತು ಬೇರೆ ದೇವರುಗಳಿಲ್ಲ.
ನನ್ನ ಹೊರತು ಬೇರೆ ಯಾವ ''ಬಂಡೆ''ಯೂ ಇಲ್ಲ.
ನಾನೊಬ್ಬನೇ!''

## ಸುಳ್ಳುದೇವರುಗಳು ಪ್ರಯೋಜನಕ್ಕೆ ಬಾರದವುಗಳು

9ಜನರು ವಿಗ್ರಹಗಳನ್ನು ಮಾಡಿಕೊಳ್ಳುವರು. ಆದರೆ
ಅವು ನಿಷ್ಪ್ರಯೋಜಕವಾದ ವಸ್ತುಗಳಾಗಿವೆ. ಜನರು ಆ
ವಿಗ್ರಹಗಳನ್ನು ಪ್ರೀತಿಸುತ್ತಾರೆ. ಆದರೆ ಅವುಗಳು ಯಾವ
ಪ್ರಯೋಜನಕ್ಕೂ ಬಾರವು. ಆ ಜನರು ಆ ವಿಗ್ರಹದ
ಸಾಕ್ಷಿಗಳಾಗಿದ್ದಾರೆ. ಆದರೆ ಅವುಗಳಿಗೆ ದೃಷ್ಟಿ ಇಲ್ಲ.
ಅವುಗಳಿಗೆ ಏನೂ ಗೊತ್ತಿಲ್ಲ. ತಮ್ಮ ಕಾರ್ಯಗಳು ನಾಚಿಕೆ
ಗೆಟ್ಟವುಗಳೆಂಬ ತಿಳುವಳಿಕೆಯೂ ಅವರಲ್ಲಿಲ್ಲ.
10ಈ ಸುಳ್ಳುದೇವರುಗಳನ್ನು ಮಾಡಿದವರ್ಯಾರು?
ಇಂಥ ಉಪಯೋಗವಿಲ್ಲದ ವಿಗ್ರಹಗಳನ್ನು ಮಾಡಿದವ
ರ್ಯಾರು? 11ಕುಶಲಕರ್ಮಿಗಳು ಆ ದೇವರುಗಳನ್ನು ಮಾಡಿ
ದರು. ಆ ಕುಶಲಕರ್ಮಿಗಳೆಲ್ಲಾ ಜನರೇ, ಅವರು
ದೇವರುಗಳಲ್ಲ. ಆ ದೇವರುಗಳೆಲ್ಲಾ ಒಟ್ಟಾಗಿ ಸೇರಿ ತಮ್ಮೊ
ಳಗೆ ಮಾತಾಡಿಕೊಂಡರೆ ಆಗ ಅವುಗಳಿಗೆ ನಾಚಿಕೆಯೂ
ಭಯವೂ ಉಂಟಾಗುವದು.
12ಒಬ್ಬನು ಕುಲಿಮೆಯ ಬೆಂಕಿಯ ಮೇಲೆ ಕಬ್ಬಿಣವನ್ನು
ಕಾಯಿಸುತ್ತಾನೆ. ಅವನು ತನ್ನ ಸುತ್ತಿಗೆಯಿಂದ ಆ
ಲೋಹವನ್ನು ವಿಗ್ರಹವನ್ನಾಗಿ ಮಾಡುತ್ತಾನೆ. ಅವನು
ಅದನ್ನು ತನ್ನ ತೋಳ್ಬಲದಿಂದ ಮಾಡುತ್ತಾನೆ. ಆದರೆ
ಅವನು ಹಸಿದಾಗ ಅವನ ಶಕ್ತಿಯು ಕಡಿಮೆಯಾಗುತ್ತದೆ.
ಆ ಮನುಷ್ಯನು ನೀರನ್ನು ಕುಡಿಯದಿದ್ದರೆ ಅವನು ಬಲ
ಹೀನನಾಗುವನು.
13ಇನ್ನೊಬ್ಬ ಕುಶಲಕರ್ಮಿಯು ತನ್ನ ನೂಲಿನಿಂದಲೂ
ಅಡಿಕೋಲುಗಳಿಂದಲೂ ಮರದ ಮೇಲೆ ಗುರುತು
ಮಾಡುವನು. ತಾನು ಎಲ್ಲಿ ಮರವನ್ನು ತುಂಡು ಮಾಡ
ಬೇಕೆಂದು ಇದರಿಂದ ಗೊತ್ತುಪಡಿಸಿಕೊಳ್ಳುತ್ತಾನೆ. ಅವನು
ತನ್ನ ಉಳಿಗಳಿಂದ ಒಂದು ವಿಗ್ರಹವನ್ನು ಮನುಷ್ಯಾಕಾರ
ದಲ್ಲಿ ಕೆತ್ತುತ್ತಾನೆ. ಈ ವಿಗ್ರಹವು ಬೇರೆ ಏನೂ ಮಾಡದೆ
ಮನೆಯೊಳಗೆ ಇಟ್ಟ ಸ್ಥಳದಲ್ಲಿಯೇ ಇರುವದು.
14ಬೇರೊಬ್ಬನು ದೇವದಾರು ಮರಗಳನ್ನಾಗಲೀ
ತುರಾಯಿ ಮರಗಳನ್ನಾಗಲೀ ಓಕ್ ಮರಗಳ ನ್ನಾಗಲೀ
ಕಡಿಯುತ್ತಾನೆ. (ಅವನು ಆ ಮರಗಳನ್ನು ಬೆಳೆಯಿಸಲಿಲ್ಲ.
ಅವು ತಾವಾಗಿಯೇ ಅಡವಿಯಲ್ಲಿ ಬೆಳೆದವು. ಅವನು
ಮರದ ಸಸಿಯನ್ನು ನೆಟ್ಟರೆ ಮಳೆಯು ಆ ಸಸಿಯನ್ನು
ಮರವನ್ನಾಗಿ ಬೆಳೆಯಿಸುವುದು.) 15ಅವನು ಮರವನ್ನು
ಕಡಿದು, ತನ್ನನ್ನು ಬೆಚ್ಚಗೆ ಮಾಡಲು ಅಗ್ಗಿಷ್ಟಿಕೆಗಾಗಿ
ಉಪಯೋಗಿಸುತ್ತಾನೆ; ಸಣ್ಣಸಣ್ಣ ತುಂಡುಗಳನ್ನಾಗಿ
ಮಾಡಿ ಆಹಾರವನ್ನು ಬೇಯಿಸುತ್ತಾನೆ; ತನ್ನನ್ನು ಬೆಚ್ಚಗೆ
ಮಾಡಿಕೊಳ್ಳುತ್ತಾನೆ. ರೊಟ್ಟಿಯನ್ನು ಸುಡುತ್ತಾನೆ; ಉಳಿದ
ಮರದ ತುಂಡಿನಿಂದ ಒಂದು ವಿಗ್ರಹವನ್ನು ಕೆತ್ತುತ್ತಾನೆ.
ಆ ವಿಗ್ರಹಕ್ಕೆ ದೇವರೆಂದು ಹೇಳುತ್ತಾನೆ; ಆ ದೇವರು
ಮನುಷ್ಯನು ತಯಾರಿಸಿದ ವಿಗ್ರಹ. ಆದರೆ ಅವನು ಆ
ವಿಗ್ರಹದ ಮುಂದೆ ಅಡ್ಡಬೀಳುವನು. 16ಮರದ ಅರ್ಧ
ಭಾಗವನ್ನು ಬೆಂಕಿಯಲ್ಲಿ ಉರಿಸುವನು; ಆ ಬೆಂಕಿಯಲ್ಲಿ
ಮಾಂಸವನ್ನು ಬೇಯಿಸಿ ಹೊಟ್ಟೆ ತುಂಬಾ ತಿನ್ನುವನು; ಆ
ಮರದ ಸೌದೆಯನ್ನು ಸುಟ್ಟು ಚಳಿ ಕಾಯಿಸಿಕೊಳ್ಳುವನು;
''ಈಗ ನನಗೆ ಬೆಚ್ಚಗಾಯಿತು. ಬೆಂಕಿಯ ಪ್ರಕಾಶದಲ್ಲಿ
ನನಗೆ ಕಾಣುತ್ತದೆ!'' ಎಂದು ಹೇಳುವನು. 17ಆದರಲ್ಲಿ

ಸ್ವಲ್ಪ ಮರದ ತುಂಡು ಉಳಿದಿದೆ. ಅದನ್ನು ನೋಡಿ ಆ ಮನುಷ್ಯನು ಅದರಿಂದ ವಿಗ್ರಹವನ್ನು ತಯಾರಿಸುವನು. ಅದನ್ನು ದೇವರೆಂದು ಕರೆಯುವನು. ಅದರ ಮುಂದೆ ಅಡ್ಡಬಿದ್ದು ಆರಾಧಿಸುವನು. ಅದರ ಮುಂದೆ ಪ್ರಾರ್ಥಿಸಿ, ''ನೀನೇ ನನ್ನ ದೇವರು, ನನ್ನನ್ನು ರಕ್ಷಿಸು'' ಎಂದು ಹೇಳುತ್ತಾನೆ.

18ಅವರಿಗೆ ತಾವು ಮಾಡುವುದು ಗೊತ್ತಿಲ್ಲ. ಅವರು
ಅರ್ಥಮಾಡಿಕೊಳ್ಳುವುದಿಲ್ಲ. ಅವರು ಕಾಣಲಾರದಂತೆ
ಅವರ ಕಣ್ಣುಗಳು ಮುಚ್ಚಲ್ಪಟ್ಟವೆಯೊ ಎಂಬಂತಿವೆ. ಅವರ
ಹೃದಯಗಳು ಅರ್ಥಮಾಡಿಕೊಳ್ಳಲು ಪ್ರಯತ್ನಿಸುವು
ದಿಲ್ಲ. 19''ನಾನು ಆ ಮರದ ತುಂಡಗಳನ್ನು ಬೆಂಕಿಯಲ್ಲಿ
ಉರಿಸಿ ಚಳಿಕಾಯಿಸಿಕೊಂಡೆನು; ಅದರ ಕೆಂಡದಲ್ಲಿ
ರೊಟ್ಟಿ ಸುಟ್ಟೆನು; ಮಾಂಸ ಬೇಯಿಸಿದೆನು; ಆ ಮಾಂಸ
ವನ್ನು ತಿಂದೆನು; ಉಳಿದಮರದ ತುಂಡಿನಿಂದ ಅಸಹ್ಯ
ವಾದ ಈ ವಿಗ್ರಹನ್ನು ಮಾಡಿದೆನು; ನಾನು ಮರದ
ತುಂಡನ್ನು ಪೂಜಿಸುತ್ತೇನೆ''ಎಂದು ಅವರೆಂದೂ
ಯೋಚಿಸುವದಿಲ್ಲ.

20ಆ ಮನುಷ್ಯನಿಗೆ ತಾನು ಮಾಡುತ್ತಿರುವುದೇ ತಿಳಿ
ಯದು. ಅವನು ಗಲಿಬಿಲಿಗೊಂಡಿದ್ದಾನೆ. ಅವನ ಹೃದ
ಯವು ಅವನನ್ನು ತಪ್ಪುದಾರಿಯಲ್ಲಿ ನಡಿಸುತ್ತದೆ. ಅವನು
ತನ್ನನ್ನು ತಾನೇ ರಕ್ಷಿಸಲಾರನು. ತಾನು ಮಾಡುತ್ತಿರುವುದು
ತಪ್ಪೆಂದು ಅವನು ಕಾಣಲಾರನು. ''ನನ್ನ ಕೈಯಲ್ಲಿರುವ
ಈ ವಿಗ್ರಹವು ಸುಳ್ಳುದೇವರಾಗಿದೆ'' ಎಂದು ಅವನು
ಹೇಳುವದಿಲ್ಲ.

## ನಿಜದೇವರಾದ ಯೆಹೋವನು ಇಸ್ರೇಲರ ಸಹಾಯಕನು

21 ''ಯಾಕೋಬೇ, ಈ ವಿಷಯಗಳನ್ನು ನೆನಪಿನಲ್ಲಿ
ಟ್ಟುಕೋ! ಇಸ್ರೇಲೇ, ನೀನು ನನ್ನ ಸೇವಕನೆಂಬು
ದನ್ನು ನೆನಪಿನಲ್ಲಿಟ್ಟುಕೋ! ನಾನೇ ನಿನ್ನನ್ನು
ನಿರ್ಮಿಸಿದೆನು; ನೀನೇ ನನ್ನ ಸೇವಕನು. ಆದುದ
ರಿಂದ ಇಸ್ರೇಲೇ, ನನ್ನನ್ನು ಮರೆತು ಬಿಡಬೇಡ.
22 ನಿನ್ನ ಪಾಪಗಳು ದೊಡ್ಡ ಮೋಡದಂತಿವೆ. ಆದರೆ
ನಾನು ಅವುಗಳನ್ನು ಅಳಿಸಿಬಿಟ್ಟಿದ್ದೇನೆ. ನಿನ್ನ ಪಾಪ
ಗಳನ್ನು ಗಾಳಿಯಲ್ಲಿ ಹಾರಿಹೋದ ಮೋಡದಂತೆ
ಹಾರಿಸಿಬಿಟ್ಟಿದ್ದೇನೆ. ನಾನು ನಿನ್ನನ್ನು ರಕ್ಷಿಸಿದೆನು.
ಆದುದರಿಂದ ನನ್ನ ಬಳಿಗೆ ಹಿಂತಿರುಗಿ ಬಾ.
23 ಯೆಹೋವನು ಮಹಾಕಾರ್ಯಗಳನ್ನು ಮಾಡಿದ್ದ
ರಿಂದ ಆಕಾಶವು ಹರ್ಷಿಸುತ್ತದೆ. ಭೂಮಿಯೂ
ಭೂಮಿಯ ಅಧೋಭಾಗವೂ ಸಂತೋಷಿಸುತ್ತದೆ.
ಪರ್ವತಗಳು ಕೃತಜ್ಞತಾಸ್ತುತಿಗಳನ್ನು ಮಾಡುತ್ತಿವೆ.
ಅರಣ್ಯದಲ್ಲಿರುವ ಎಲ್ಲಾ ಮರಗಳು ಹರ್ಷಿಸುತ್ತವೆ.
ಯಾಕೆಂದರೆ ಯೆಹೋವನು ಯಾಕೋಬನನ್ನು
ರಕ್ಷಿಸಿದನು, ಇಸ್ರೇಲಿಗೆ ಆತನು ಅದ್ಭುತ ಕಾರ್ಯ
ವನ್ನು ಮಾಡಿದ್ದಾನೆ.
24 ಯೆಹೋವನು ನಿನ್ನನ್ನು ರೂಪಿಸಿದನು. ನೀನು ನಿನ್ನ
ತಾಯಿಯ ಗರ್ಭದಲ್ಲಿರುವಾಗಲೇ ಆತನು ನಿನ್ನನ್ನು
ರೂಪಿಸಿದನು. ಆತನು ಹೇಳುವದೇನೆಂದರೆ,
ಯೆಹೋವನಾದ ನಾನು ಸಮಸ್ತವನ್ನೂ ಸೃಷ್ಟಿಸಿ
ದೆನು. ಆಕಾಶವನ್ನು ಅದರ ಸ್ಥಳದಲ್ಲಿ ಇಟ್ಟೆನು;
ಭೂಮಿಯನ್ನು ನನ್ನ ಮುಂದೆ ಹರಡಿದೆನು.

25ಸುಳ್ಳುಪ್ರವಾದಿಗಳು ಸುಳ್ಳನ್ನೇ ಹೇಳುತ್ತಾರೆ. ಅವರು
ಹೇಳಿದ್ದೆಲ್ಲವೂ ಸುಳ್ಳು ಎಂದು ಯೆಹೋವನು ತೋರಿಸಿ
ಕೊಡುತ್ತಾನೆ. ಮಂತ್ರಗಾರರನ್ನು ದೇವರು ಮೂರ್ಖರ
ನ್ನಾಗಿ ಮಾಡುತ್ತಾನೆ. ಆತನು ಜ್ಞಾನಿಗಳನ್ನು ಗಲಿಬಿಲಿ
ಗೊಳಿಸುತ್ತಾನೆ. ಅವರು ತಮಗೆ ಎಲ್ಲವೂ ಗೊತ್ತಿದೆ ಎಂದು
ತಿಳಿದುಕೊಳ್ಳುತ್ತಾರೆ. ಆದರೆ ದೇವರು ಅವರನ್ನು
ಮೂಢರನ್ನಾಗಿ ಮಾಡುತ್ತಾನೆ. 26ಯೆಹೋವನು ತನ್ನ
ಸೇವಕರನ್ನು ಜನರಿಗೆ ಸಂದೇಶ ತಿಳಿಸುವದಕ್ಕಾಗಿ ಉಪ
ಯೋಗಿಸಿಕೊಳ್ಳುತ್ತಿದ್ದಾನೆ. ಆತನ ಸಂದೇಶಗಳು ಸತ್ಯ
ವಾದವುಗಳಾಗಿವೆ. ಜನರು ಮಾಡಬೇಕಾದ ಕಾರ್ಯಗಳ
ಬಗ್ಗೆ ಯೆಹೋವನು ಸಂದೇಶಕರನ್ನು ಕಳುಹಿಸುತ್ತಾನೆ.
ಅವರ ಸಲಹೆಯು ಒಳ್ಳೆಯದೆಂದು ಯೆಹೋವನು
ತೋರಿಸಿಕೊಡುತ್ತಾನೆ.

## ಯೆಹೂದದ ಪುನರ್‌ನಿರ್ಮಾಣದಲ್ಲಿ ಸೈರಸನ ಪಾತ್ರ

ಯೆಹೋವನು ಜೆರುಸಲೇಮಿಗೆ ಇಂತೆನ್ನುತ್ತಾನೆ,
''ಜನರು ನಿನ್ನಲ್ಲಿ ಮತ್ತೆ ವಾಸಮಾಡುವರು''
ಯೆಹೂದದ ನಗರಗಳಿಗೆ ಯೆಹೋವನು ಅನ್ನು
ತ್ತಾನೆ, ''ನೀವು ತಿರುಗಿ ಕಟ್ಟಲ್ಪಡುವಿರಿ'' ಕೆಡವಲ್ಪಟ್ಟ
ನಗರಗಳಿಗೆ, ''ನಾನು ತಿರುಗಿ ನಿಮ್ಮನ್ನು ನಗರಗಳ
ನ್ನಾಗಿ ಮಾಡುತ್ತೇನೆ'' ಎಂದು ಯೆಹೋವನು
ಹೇಳುತ್ತಾನೆ.
27 ನೀರಿನ ಅಗಾಧಕ್ಕೆ, ''ಒಣಗಿಹೋಗು, ನಿನ್ನ ಬುಗ್ಗೆ
ಗಳನ್ನು ನಾನು ಬತ್ತಿಸುವೆನು'' ಎಂದು
ಯೆಹೋವನು ಅನ್ನುತ್ತಾನೆ.
28 ಸೈರಸನಿಗೆ ಯೆಹೋವನು, ''ನೀನೇ ನನ್ನ ಕುರು
ಬನು. ನಾನು ಬಯಸುವ ಕಾರ್ಯಗಳನ್ನು ನೀನು
ಮಾಡುವೆ. ನೀನು ಜೆರುಸಲೇಮಿಗೆ, 'ನೀನು ಕಟ್ಟಲ್ಪ
ಡುವೆ' ಎಂದೂ ದೇವಾಲಯಕ್ಕೆ 'ನಿನ್ನ ಅಸ್ತಿವಾರವು
ಮತ್ತೆ ಹಾಕಲ್ಪಡುವದು' ಎಂದೂ ಹೇಳುವೆ'' ಎಂದು
ಯೆಹೋವನು ಹೇಳುತ್ತಾನೆ.

### ಇಸ್ರೇಲಿಗೆ ಸ್ವಾತಂತ್ರ್ಯ ಕೊಡಲು ಯೆಹೋವನಿಗೆ ಸೈರಸನ ಆಯ್ಕೆ

45 ತಾನು ಆರಿಸಿರುವ ಅರಸನಾದ ಸೈರಸನಿಗೆ
ಯೆಹೋವನು ಹೇಳುವುದೇನೆಂದರೆ:
‘‘ನಾನು ಸೈರಸನ ಬಲಗೈಯನ್ನು ಹಿಡಿಯುವೆನು. ಅರಸರುಗಳಿಂದ ಅವರ ಅಧಿಕಾರವನ್ನು ತೆಗೆದು ಬಿಡುವಂತೆ ಅವನಿಗೆ ಸಹಾಯಮಾಡುವೆನು. ನಗರ ದ್ವಾರಗಳು ಅವನ ಮುನ್ನುಗ್ಗುವಿಕೆಯನ್ನು ನಿಲ್ಲಿಸದು. ನಗರದ್ವಾರವನ್ನು ತೆರೆದು ಸೈರಸನು ಒಳಗೆ ಪ್ರವೇಶಿಸುವಂತೆ ಮಾಡುವೆನು.’’

2 ‘‘ಸೈರಸನೇ, ನಿನ್ನ ಸೈನ್ಯವು ಮುನ್ನುಗ್ಗುವದು. ನಾನು ಅವರ ಮುಂದಿನಿಂದ ಹೋಗುವೆನು. ಪರ್ವತಗಳನ್ನು ನೆಲಸಮ ಮಾಡುವೆನು. ಹಿತ್ತಾಳೆಯ ನಗರ ದ್ವಾರಗಳನ್ನು ಪುಡಿಪುಡಿ ಮಾಡುವೆನು. ದ್ವಾರಗಳ ಕಬ್ಬಿಣದ ಸರಳುಗಳನ್ನು ತುಂಡು ಮಾಡಿ ಬಿಡುವೆನು.

3 ಕತ್ತಲೆಯಲ್ಲಿ ಕೂಡಿಸಿಟ್ಟಿದ್ದ ಐಶ್ವರ್ಯವನ್ನು ನಾನು ನಿನಗೆ ಕೊಡುವೆನು. ಗುಪ್ತವಾಗಿಟ್ಟಿದ್ದ ನಿಕ್ಷೇಪವನ್ನು ನಾನು ನಿನಗೆ ಕೊಡುವೆನು. ನಾನೇ ಯೆಹೋವನೆಂದು ನೀನು ತಿಳಿಯುವಂತೆ ಇದೆಲ್ಲಾ ಮಾಡುವೆನು. ನಾನೇ ಇಸ್ರೇಲರ ದೇವರಾದ ಯೆಹೋವನು. ನಿನ್ನನ್ನು ಹೆಸರೆತ್ತಿ ಕರೆಯುತ್ತಿದ್ದೇನೆ.

4 ನಾನು ನನ್ನ ಸೇವಕನಾದ ಯಾಕೋಬನಿಗಾಗಿ ಇದೆಲ್ಲಾ ಮಾಡುತ್ತಿದ್ದೇನೆ. ನಾನು ಆರಿಸಿಕೊಂಡ ಜನಾಂಗವಾದ ಇಸ್ರೇಲಿಗಾಗಿ ಇದನ್ನೆಲ್ಲಾ ಮಾಡುತ್ತಿದ್ದೇನೆ. ಸೈರಸನೇ, ನೀನು ನನ್ನನ್ನು ತಿಳಿದಿಲ್ಲ, ಆದರೆ ನಾನು ನಿನ್ನ ಹೆಸರೆತ್ತಿ ಕರೆಯುತ್ತಿದ್ದೇನೆ.

5 ಯೆಹೋವನೆಂಬ ನಾನೊಬ್ಬನೇ ದೇವರು. ನನ್ನ ಹೊರತು ಬೇರೆ ದೇವರುಗಳಿಲ್ಲ. ನೀನು ಬಟ್ಟೆಗಳನ್ನು ಧರಿಸಿಕೊಳ್ಳುವಂತೆ ಮಾಡಿದವನು ನಾನೇ. ಆದರೂ ನೀನು ನನ್ನನ್ನು ತಿಳಿದಿಲ್ಲ.

6 ನಾನೊಬ್ಬನೇ ದೇವರೆಂದು ಎಲ್ಲರೂ ತಿಳಿದುಕೊಳ್ಳಲಿ ಎಂದು ನಾನು ಇದನ್ನೆಲ್ಲಾ ಮಾಡುತ್ತಿದ್ದೇನೆ. ಪೂರ್ವದಿಂದ ಪಶ್ಚಿಮದ ತನಕ ಜನರೆಲ್ಲರೂ ನಾನೇ ದೇವರೆಂದೂ ನನ್ನ ಹೊರತು ಬೇರೆ ದೇವರಿಲ್ಲವೆಂದೂ ತಿಳಿದುಕೊಳ್ಳುವರು.

7 ನಾನು ಬೆಳಕನ್ನೂ ಕತ್ತಲೆಯನ್ನೂ ಮಾಡಿದೆನು. ಸಮಾಧಾನವನ್ನೂ ತೊಂದರೆಗಳನ್ನೂ ಉಂಟು ಮಾಡಿದೆನು. ನಾನೇ ಯೆಹೋವನು. ಇವೆಲ್ಲವನ್ನು ನಾನು ಮಾಡುವೆನು.

8 ಆಕಾಶದಲ್ಲಿರುವ ಮೋಡಗಳು ಒಳ್ಳೆಯತನವನ್ನು ಭೂಮಿಯ ಮೇಲೆ ಸುರಿಯಲಿ. ಭೂಮಿಯು ತೆರೆದು ರಕ್ಷಣೆಯು ಬೆಳೆಯಲಿ. ಒಳ್ಳೆತನವು ಅದರೊಂದಿಗೆ ಬೆಳೆಯಲಿ. ಯೆಹೋವನೆಂಬ ನಾನೇ ಅವನನ್ನು ನಿರ್ಮಿಸಿದೆನು.’’

### ದೇವರು ತನ್ನ ಸೃಷ್ಟಿಯನ್ನು ನಿಯಂತ್ರಿಸುವನು

9 ‘‘ಈ ಜನರನ್ನು ನೋಡು. ತಮ್ಮನ್ನು ಸೃಷ್ಟಿಸಿದಾತನೊಂದಿಗೆ ವಾದಿಸುತ್ತಿದ್ದಾರೆ. ನನ್ನೊಂದಿಗೆ ವಾದಿಸುವದನ್ನು ನೋಡಿರಿ! ಅವರು ತುಂಡುತುಂಡಾದ ಮಣ್ಣಿನ ಮಡಿಕೆಯಂತಿದ್ದಾರೆ. ಒಬ್ಬನು ಒದ್ದೆ ಆವೆಮಣ್ಣಿನಿಂದ ಮಡಿಕೆಯನ್ನು ಮಾಡುತ್ತಾನೆ. ಆ ಮಡಿಕೆಯು ಕುಂಬಾರನಿಗೆ, ‘ನೀನು ಮಾಡುತ್ತಿರುವುದೇನು’ ಎಂದು ಪ್ರಶ್ನಿಸುವದಿಲ್ಲ. ತಯಾರಿಸಲ್ಪಟ್ಟ ವಸ್ತುಗಳಿಗೆ ತಯಾರಿಸಿದವನನ್ನು ಪ್ರಶ್ನಿಸುವ ಅಧಿಕಾರವಿಲ್ಲ. ಜನರು ಈ ಆವೆಮಣ್ಣಿನಂತೆ ಇದ್ದಾರೆ.
10 ತಂದೆಯು ಮಕ್ಕಳನ್ನು ಹುಟ್ಟಿಸುತ್ತಾನೆ. ಮಕ್ಕಳು ತಂದೆಯನ್ನು, ‘ನನಗೆ ಜೀವ ಯಾಕೆ ಕೊಟ್ಟೇ?’ ಎಂದು ಕೇಳಲಾಗುವುದಿಲ್ಲ. ಮಕ್ಕಳು ತಮ್ಮ ತಾಯಿಗೆ ನನ್ನನ್ನು ಯಾಕೆ ಹೆತ್ತದ್ದು ಎಂದು ಕೇಳಲಾಗುವುದಿಲ್ಲ.’’

11 ದೇವರಾದ ಯೆಹೋವನು ಇಸ್ರೇಲರ ಪರಿಶುದ್ಧನಾಗಿದ್ದಾನೆ. ಆತನು ಇಸ್ರೇಲನ್ನು ಸೃಷ್ಟಿಸಿದನು. ಯೆಹೋವನು ಹೇಳುವದೇನೆಂದರೆ,

‘‘ನಾನು ಕೈಯಾರೆ ಮಾಡಿದ ಮಕ್ಕಳ ಬಗ್ಗೆ ನೀನು ಪ್ರಶ್ನಿಸುವಿಯಾ? ನಾನು ಏನು ಮಾಡಬೇಕೆಂದು ನೀನು ನನಗೆ ಆಜ್ಞಾಪಿಸಿವಿಯೋ?

12 ನಾನು ಭೂಮಿಯನ್ನು ನಿರ್ಮಿಸಿದವನೂ ಅದರಲ್ಲಿ ವಾಸಿಸುವ ಎಲ್ಲಾ ಜನರನ್ನು ಉಂಟು ಮಾಡಿದವನೂ ನಾನೇ. ನನ್ನ ಸ್ವಹಸ್ತದಿಂದ ಆಕಾಶವನ್ನು ನಿರ್ಮಿಸಿದ್ದೇನೆ. ಅಕಾಶದಲ್ಲಿರುವ ಎಲ್ಲಾ ನಕ್ಷತ್ರಪುಂಜಗಳನ್ನು ನನ್ನ ಹತೋಟಿಯಲ್ಲಿಟ್ಟೇದ್ದೇನೆ.

13 ನಾನು ಸೈರಸನಿಗೆ ಸುಕಾರ್ಯಗಳನ್ನು ಮಾಡಲು ಶಕ್ತಿಯನ್ನು ಕೊಟ್ಟಿದ್ದೇನೆ. ಅವನ ಕೆಲಸಗಳನ್ನೆಲ್ಲಾ ಸುಲಭಗೊಳಿಸುತ್ತೇನೆ. ಸೈರಸನು ನನ್ನ ಪಟ್ಟಣವನ್ನು ಮತ್ತೆ ಕಟ್ಟುವನು; ನನ್ನ ಜನರಿಗೆ ಸ್ವಾತಂತ್ರವನ್ನು ಕೊಡುವನು. ನನ್ನ ಜನರನ್ನು ನನಗೆ ಮಾರಿಬಿಡುವದಿಲ್ಲ. ಈ ಕಾರ್ಯಗಳನ್ನೆಲ್ಲ ಮಾಡುವದಕ್ಕೆ ನಾನು ಅವನಿಗೆ ಹಣ ಕೊಡುವ ಅವಶ್ಯವಿಲ್ಲ. ಜನರು ಸ್ವತಂತ್ರರಾಗುವರು. ಇದಕ್ಕಾಗಿ ನನಗೇನೂ ಖರ್ಚು ಇಲ್ಲ.’’ ಇದು ಸರ್ವಶಕ್ತನಾದ ಯೆಹೋವನ ನುಡಿ.

14 ಯೆಹೋವನು ಹೇಳುವದೇನೆಂದರೆ, ‘‘ಈಜಿಪ್ಟ್ ಮತ್ತು ಇಥಿಯೋಪ್ಯ ಐಶ್ವರ್ಯವುಳ್ಳ ರಾಜ್ಯಾಗ

ಳಾಗಿವೆ. ಇಸ್ರೇಲೇ, ನೀನು ಆ ಐಶ್ವರ್ಯವನ್ನು ಪಡ
ಕೊಳ್ಳುವೆ. ಸೆಬಾದ ಉನ್ನತ ಜನರು ನಿನ್ನವರಾಗು
ವರು. ಅವರು ತಮ್ಮ ಕುತ್ತಿಗೆಗಳಲ್ಲಿ ಸಂಕೋಲೆ
ಗಳಿಂದ ಬಂಧಿತರಾಗಿ ನಿಮ್ಮ ಹಿಂದೆ ನಡೆಯುವರು.
ಇಸ್ರೇಲೇ, ದೇವರು ನಿನ್ನೊಂದಿಗಿದ್ದಾನೆ. ಬೇರೆ
ದೇವರುಗಳೇ ಇಲ್ಲ.''

15 ದೇವರೇ, ಜನರು ನಿನ್ನನ್ನು ಕಾಣಲಾರರು. ನೀನೇ
ಇಸ್ರೇಲರ ವಿಮೋಚಕನು.

16 ಎಷ್ಟೋ ಜನರು ಸುಳ್ಳುದೇವರುಗಳನ್ನು ರೂಪಿಸಿ
ಕೊಂಡು ನಿರಾಶರಾಗುವರು. ಅವರೆಲ್ಲರೂ
ನಾಚಿಕೆಗೆ ಗುರಿಯಾಗುವರು.

17 ಆದರೆ ಇಸ್ರೇಲು ಯೆಹೋವನಿಂದ ರಕ್ಷಿಸಲ್ಪಡು
ವದು. ಆ ರಕ್ಷಣೆಯು ಶಾಶ್ವತವಾದದ್ದು. ಇನ್ನೆಂ
ದಿಗೂ ಇಸ್ರೇಲ್ ನಾಚಿಕೆಗೆ ಒಳಗಾಗುವದಿಲ್ಲ.

18 ಯೆಹೋವನು ದೇವರಾಗಿದ್ದಾನೆ. ಆತನು
ಭೂಮ್ಯಾಕಾಶಗಳನ್ನು ಉಂಟುಮಾಡಿದ್ದಾನೆ.
ಆತನು ಭೂಮಿಯನ್ನು ಅದರ ಸ್ಥಾನದಲ್ಲಿ ಇಟ್ಟಿ
ದ್ದಾನೆ. ಆತನು ಈ ಲೋಕವನ್ನು ಸೃಷ್ಟಿಸಿದ್ದು ಅದು
ಶೂನ್ಯವಾಗಿರಲೆಂದಲ್ಲ. ಅದು ಜನಭರಿತವಾಗಿರ
ಲೆಂದೇ ಸೃಷ್ಟಿಸಿದನು. ''ನಾನೇ ಯೆಹೋವನು, ನನ್ನ
ಹೊರತು ಬೇರೆ ದೇವರುಗಳಿಲ್ಲ.

19 ನಾನು ಗುಪ್ತವಾಗಿ ಮಾತನಾಡದೆ ಬಹಿರಂಗ
ವಾಗಿಯೇ ಮಾತನಾಡಿದ್ದೇನೆ. ಈ ಭೂಮಿಯು
ಕತ್ತಲೆಯ ಸ್ಥಳದಲ್ಲಿ ನನ್ನ ಮಾತುಗಳನ್ನು ಅಡಗಿಸಿಡ
ಲಿಲ್ಲ. ನನ್ನನ್ನು ಕಂಡುಹಿಡಿಯಲು ಗುಪ್ತಸ್ಥಳದಲ್ಲಿ
ಹುಡುಕಿರಿ ಎಂದು ನಾನು ಯಾಕೋಬನ ಜನರಿಗೆ
ಹೇಳಲಿಲ್ಲ. ನಾನೇ ಯೆಹೋವನು. ನಾನು ಸತ್ಯ
ವನ್ನೇ ಆಡುವೆನು.''

## ಯೆಹೋವನೊಬ್ಬನೇ ದೇವರು

20''ಬೇರೆ ದೇಶಗಳಿಗೆ ಪಾರಾದವರೇ, ಒಟ್ಟಾಗಿ
ಸೇರಿಕೊಂಡು ನನ್ನ ಮುಂದೆ ಬನ್ನಿರಿ. (ಈ ಜನರು ಮರದ
ವಿಗ್ರಹಗಳನ್ನು ಇಟ್ಟುಕೊಂಡಿದ್ದಾರೆ. ತಮ್ಮನ್ನು ರಕ್ಷಿಸ
ಲಾರದ ವಿಗ್ರಹಕ್ಕೆ ಅವರು ಪ್ರಾರ್ಥಿಸುತ್ತಿದ್ದಾರೆ. ಅವರು
ಮಾಡುವದು ಅವರಿಗೇ ತಿಳಿಯದು. 21ನನ್ನ ಬಳಿಗೆ
ಬರಲು ಅವರಿಗೆ ಹೇಳು. ತಾವು ವಿಗ್ರಹಗಳನ್ನು ಯಾಕೆ
ನಂಬುತ್ತಾರೆಂದು ನನ್ನೊಂದಿಗೆ ವಾದಿಸಲಿ.)

''ಬಹಳ ಕಾಲದ ಹಿಂದೆ ನಡೆದ ಸಂಗತಿಗಳ ಬಗ್ಗೆ ನಿಮಗೆ
ತಿಳಿಸಿದವರು ಯಾರು? ಬಹಳ ಕಾಲದಿಂದ ಈ ವಿಷಯ
ಗಳನ್ನು ನಿಮಗೆ ತಿಳಿಸುತ್ತಾ ಬಂದವರು ಯಾರು? ನಾನೇ.
ಯೆಹೋವನಾದ ನಾನೇ ನಿಮಗೆಲ್ಲವನ್ನು ತಿಳಿಸಿದೆನು.
ನಾನೊಬ್ಬನೇ ದೇವರು. ನನ್ನಂಥ ದೇವರು ಬೇರೆ
ಇದ್ದಾರೆಯೇ? ಕರುಣೆಯುಳ್ಳ ದೇವರು ಬೇರೆಲ್ಲಾದರೂ
ಇರುವನೇ? ತನ್ನ ಜನರನ್ನು ವಿಮೋಚಿಸುವಂಥ ಬೇರೆ
ದೇವರು ಇರುವನೇ? ಇಲ್ಲ! ಬೇರೆ ದೇವರು ಇಲ್ಲ!
22ದೂರದೇಶದಲ್ಲಿರುವ ಜನರೇ, ನೀವು ಸುಳ್ಳು ದೇವ
ರನ್ನು ಅವಲಂಬಿಸುವದನ್ನು ನಿಲ್ಲಿಸಿರಿ. ನನ್ನನ್ನು ಹಿಂಬಾ
ಲಿಸಿ ರಕ್ಷಣೆ ಹೊಂದಿರಿ. ನಾನೇ ದೇವರು. ಬೇರೆ
ದೇವರುಗಳೇ ಇಲ್ಲ. ನಾನೊಬ್ಬನೇ ದೇವರು.''

23''ನನ್ನ ಪರಾಕ್ರಮದಿಂದ ನಾನು ವಾಗ್ದಾನ ಮಾಡು
ತ್ತೇನೆ. ನನ್ನ ಆಜ್ಞೆಯು ನ್ಯಾಯವಾದದ್ದೂ ನೀತಿಯು
ಳ್ಳದ್ದೂ ಆಗಿದೆ. ಇಂಥದ್ದು ನಾನು ಆಜ್ಞಾಪಿಸಿದಂತೆಯೇ
ಸಂಭವಿಸುವದು. ಎಲ್ಲಾ ಜನರು ನನ್ನ ಮುಂದೆ ಅಡ್ಡ
ಬೀಳುವರೆಂದು ನಾನು ವಾಗ್ದಾನ ಮಾಡುತ್ತೇನೆ. ಪ್ರತಿ
ಯೊಬ್ಬನೂ ನನ್ನನ್ನು ಹಿಂಬಾಲಿಸಲು ಪ್ರತಿಜ್ಞೆ ಮಾಡು
ವನು. 24ಜನರು ಹೀಗನ್ನುವರು: 'ಶಕ್ತಿಯೂ, ಒಳ್ಳೆಯ
ತನವೂ ಯೆಹೋವನಿಂದಲೇ ಬರುವದು.'''

ಕೆಲವರು ಯೆಹೋವನ ಮೇಲೆ ಸಿಟ್ಟುಗೊಂಡಿದ್ದಾರೆ.
ಆದರೆ ಆತನ ಸಾಕ್ಷಿಗಳು ಆತನು ಮಾಡಿದ ಕಾರ್ಯಗಳ
ಕುರಿತು ಹೇಳುವರು. ಆಗ ಸಿಟ್ಟುಗೊಂಡವರು ನಾಚಿಕೆಗೆ
ಒಳಗಾಗುವರು. 25ಇಸ್ರೇಲರು ಧರ್ಮದಲ್ಲಿ ನಡೆಯು
ವಂತೆ ಯೆಹೋವನು ಮಾಡುವನು. ಜನರು
ಯೆಹೋವನ ಬಗ್ಗೆ ಬಹಳವಾಗಿ ಹೆಚ್ಚಳಪಡುವರು.

## ಸುಳ್ಳುದೇವರುಗಳು ನಿಷ್ಪ್ರಯೋಜಕವಾಗಿವೆ

46 ಬೇಲ್ ಮತ್ತು ನೆಬೋ ನನ್ನ ಮುಂದೆ ಅಡ್ಡ
ಬೀಳುವವು. ಆ ಸುಳ್ಳುದೇವರುಗಳು ಕೇವಲ
ವಿಗ್ರಹಗಳೇ. ಜನರು ಭಾರವಾದ ವಿಗ್ರಹಗಳನ್ನು ಪಶು
ಗಳ ಮೇಲೆ ಹೊರಿಸುವರು. ಅವು ಕೇವಲ ಹೊತ್ತು
ಕೊಂಡು ಹೋಗಬೇಕಾದ ಹೊರೆಗಳಾಗಿವೆ. ಆ ಸುಳ್ಳು
ದೇವರುಗಳು ಜನರನ್ನು ದಣಿಸುವುದೊಂದನ್ನು ಬಿಟ್ಟು
ಬೇರೆ ಯಾವ ಕೆಲಸವನ್ನೂ ಮಾಡುವದಿಲ್ಲ. 2 ಆ ಸುಳ್ಳು
ದೇವರುಗಳೆಲ್ಲಾ ಅಡ್ಡಬೀಳುವವು, ಅವುಗಳೆಲ್ಲಾ ಬಿದ್ದು
ಹೋಗುವವು; ತಪ್ಪಿಸಿಕೊಳ್ಳಲು ಅವುಗಳಿಗೆ ಸಾಧ್ಯವಿಲ್ಲ.
ಅವುಗಳನ್ನು ಸೆರೆಹಿಡಿದು ಒಯ್ಯುವರು.

3''ಯಾಕೋಬನ ವಂಶದವರೇ, ನನ್ನ ಮಾತನ್ನು
ಕೇಳಿರಿ. ಇಸ್ರೇಲರಲ್ಲಿ ಉಳಿದಿರುವವರೇ, ನನ್ನ ಮಾತು
ಗಳನ್ನು ಕೇಳಿರಿ. ನಾನು ನಿಮ್ಮನ್ನು ಹೊರುತ್ತಿದ್ದೇನೆ. ನೀನು
ತಾಯಿಯ ಗರ್ಭದಲ್ಲಿರುವಾಗಲೇ ನಾನು ನಿನ್ನನ್ನು
ಹೊರುತ್ತಿದ್ದೇನೆ. 4ನೀನು ಹುಟ್ಟಿದಾಗ ನಾನು ನಿನ್ನನ್ನು
ಹೊತ್ತುಕೊಂಡೆನು. ನೀನು ಮುದುಕನಾಗುವಾಗಲೂ
ನಾನು ನಿನ್ನನ್ನು ಹೊತ್ತುಕೊಳ್ಳುವೆನು. ನಿನ್ನ ತಲೆಕೂದಲು
ನರೆತಾಗಲೂ ನಾನು ನಿನ್ನನ್ನು ಹೊರುವೆನು; ಯಾಕೆಂದರೆ

ನಾನು ನಿನ್ನನ್ನು ಸೃಷ್ಟಿಸಿದೆನು. ಆದುದರಿಂದ ನಾನು
ನಿನ್ನನ್ನು ಹೊತ್ತುಕೊಳ್ಳುವೆನು, ನಿನ್ನನ್ನು ರಕ್ಷಿಸುವೆನು.''
5''ನನ್ನನ್ನು ನೀವು ಬೇರೆಯವರಿಗೆ ಹೋಲಿಸುವಿರಾ?
ಇಲ್ಲ. ಯಾರೂ ನನಗೆ ಸಮಾನರಿಲ್ಲ. ನನ್ನ ವಿಷಯವಾಗಿ
ನೀವು ಸಂಪೂರ್ಣವಾಗಿ ಅರಿತುಕೊಳ್ಳುವುದಿಲ್ಲ. ನನ್ನಂತಿ
ರಲು ಬೇರೆ ಯಾರಿಗಾದರೂ ಸಾಧ್ಯವೇ? 6ಕೆಲವರು
ಬೆಳ್ಳಿಬಂಗಾರಗಳಲ್ಲಿ ಐಶ್ವರ್ಯವಂತರಾಗಿದ್ದಾರೆ. ಅವರ
ಕೈಚೀಲಗಳಿಂದ ಬಂಗಾರವು ಉದುರುತ್ತವೆ, ಅವರು
ತಕ್ಕಡಿಯಲ್ಲಿ ಬೆಳ್ಳಿಯನ್ನು ತೂಗುತ್ತಾರೆ; ಕುಶಲ ಕರ್ಮಿ
ಗಳಿಗೆ ಹಣಕೊಟ್ಟು ಮರದಿಂದ ವಿಗ್ರಹವನ್ನು ಮಾಡಿಸಿ
ಕೊಳ್ಳುತ್ತಾರೆ. ಆಮೇಲೆ ಅವರು ಆ ವಿಗ್ರಹಕ್ಕೆ ಅಡ್ಡಬಿದ್ದು
ಪೂಜೆ ಮಾಡುತ್ತಾರೆ. 7ಅವರು ಆ ವಿಗ್ರಹವನ್ನು ಹೆಗಲ
ಮೇಲೆ ಕುಳ್ಳಿರಿಸಿಕೊಂಡು ಹೊರುತ್ತಾರೆ. ಆ ಸುಳ್ಳು
ದೇವರುಗಳು ನಿಷ್ಪ್ರಯೋಜಕವಾಗಿವೆ. ಜನರೇ ಅವು
ಗಳನ್ನು ಹೊತ್ತುಕೊಳ್ಳಬೇಕು. ಜನರು ಅವುಗಳನ್ನು ನೆಲದ
ಮೇಲೆ ಇಟ್ಟಾಗ ಅವು ಅಲ್ಲಾಡುವದಿಲ್ಲ. ತಮ್ಮ ಸ್ಥಳದಿಂದ
ಆ ಸುಳ್ಳುದೇವರುಗಳು ಎದ್ದುಹೋಗುವದಿಲ್ಲ. ಜನರು
ಅದರ ಮುಂದೆ ಕೂಗಿಕೊಂಡರೂ ಅವು ಕೇಳಿಸಿ
ಕೊಳ್ಳುವದಿಲ್ಲ. ಆ ಸುಳ್ಳುದೇವರುಗಳು ಕೇವಲ ವಿಗ್ರಹ
ಗಳಷ್ಟೇ. ಅವು ಜನರನ್ನು ಅವರ ಕಷ್ಟಗಳಿಂದ ಬಿಡಿಸ
ಲಾರವು.''
8''ನೀವು ಪಾಪಮಾಡಿದ್ದೀರಿ. ನೀವು ಈ ವಿಚಾರವಾಗಿ
ಮತ್ತೆ ಆಲೋಚಿಸಬೇಕು. ಈ ವಿಚಾರವನ್ನು ನಿಮ್ಮ
ನೆನಪಿಗೆ ತಂದುಕೊಂಡು ಬಲಶಾಲಿಗಳಾಗಿರಿ. 9ಬಹಳ
ಸಮಯದ ಹಿಂದೆ ನಡೆದ ಸಂಗತಿಗಳನ್ನು ಜ್ಞಾಪಕದಲ್ಲಿಟ್ಟು
ಕೊಳ್ಳಿರಿ. ನಾನು ದೇವರೆಂಬುದನ್ನು ಜ್ಞಾಪಕ ಮಾಡಿ
ಕೊಳ್ಳಿರಿ. ನನ್ನ ಹೊರತು ಬೇರೆ ದೇವರುಗಳಿಲ್ಲ. ಆ ಸುಳ್ಳು
ದೇವರುಗಳು ನನ್ನ ಹಾಗೆ ಇಲ್ಲ.''
10''ನಾನು ಅಂತ್ಯದಲ್ಲಿ ನಡೆಯಲಿರುವ ವಿಷಯಗಳನ್ನು
ಪ್ರಾರಂಭದಲ್ಲಿಯೇ ತಿಳಿಸಿರುತ್ತೇನೆ. ಬಹುಕಾಲದ ಹಿಂದೆ
ಇನ್ನೂ ಸಂಭವಿಸದ ಸಂಗತಿಗಳನ್ನು ತಿಳಿಸಿದ್ದೇನೆ. ನಾನು
ಯೋಜಿಸುವ ಸಂಗತಿಗಳು ನೆರವೇರುವವು. ನಾನು
ಮಾಡಲು ಬಯಸುವ ಕಾರ್ಯಗಳನ್ನು ನೆರವೇರಿಸು
ವೆನು. 11ಪೂರ್ವದಿಕ್ಕಿನ ಒಬ್ಬನನ್ನು ಕರೆಯುತ್ತೇನೆ.
ಅವನು ಗಿಡುಗನಂತಿರುವನು. ಅವನು ಬಹುದೂರ ದೇಶ
ದಿಂದ ಬಂದು ನನ್ನ ಬಯಕೆಯನ್ನು ಈಡೇರಿಸುವನು.
ನಾನು ಹೇಳಿದ ಸಂಗತಿಗಳನ್ನು ಮಾಡಿಮುಗಿಸುವೆನು.
ನಾನು ಅವನನ್ನು ಸೃಷ್ಟಿಸಿದೆನು. ನಾನೇ ಅವನನ್ನು ಕರೆದು
ಕೊಂಡು ಬರುವೆನು.''
12''ನಿಮ್ಮಲ್ಲಿ ಕೆಲವರು ತಾವು ಬಲಿಷ್ಠರೆಂದು ತಿಳಿದು
ಕೊಂಡಿದ್ದಾರೆ; ಆದರೆ ನೀವು ಯಾವ ಒಳ್ಳೆಯ ಕಾರ್ಯ
ಗಳನ್ನು ಮಾಡುವದಿಲ್ಲ. ನನ್ನ ಮಾತನ್ನು ಕೇಳಿರಿ. 13ನಾನು
ಒಳ್ಳೆಯ ಕಾರ್ಯಗಳನ್ನು ಮಾಡುವೆನು. ನನ್ನ ಜನರನ್ನು
ಬೇಗನೆ ರಕ್ಷಿಸುವೆನು. ಚೀಯೋನಿಗೆ ಅಂದರೆ ನನ್ನ ಅದ್ಭುತ
ವಾದ ಇಸ್ರೇಲಿಗೆ ರಕ್ಷಣೆಯನ್ನು ತರುವೆನು.''

## ಬಾಬಿಲೋನಿಗೆ ದೇವರ ಸಂದೇಶ

47 ''ಕಸ್ದೀಯರ ಕುಮಾರಿಯೇ, ಧೂಳಿನ
ಮೇಲೆ ಕುಳಿತಿಕೊ. ನೆಲದ ಮೇಲೆ
ಕುಳಿತುಕೋ! ಈಗ ನೀನು ಯಜಮಾನಿಯಲ್ಲ.
ನೀನು ಕೋಮಲವಾದ ತರುಣಿ ಎಂದು ಜನರು
ನಿನ್ನ ಬಗ್ಗೆ ಹೇಳುವದಿಲ್ಲ.
2 ಈಗ ನೀನು ದಾಸಿಯಾಗಿ ಕೆಲಸ ಮಾಡಬೇಕು. ನಿನ್ನ
ಮನೋಹರವಾದ ಉಡುಪನ್ನು ತೆಗೆದುಹಾಕು.
ಬೀಸುವ ಕಲ್ಲನ್ನು ತೆಗೆದುಕೊಂಡು ಧಾನ್ಯವನ್ನು
ಬೀಸು. ಜನರು ನಿನ್ನ ತೊಡೆಗಳನ್ನು ನೋಡುವ
ತನಕ ನಿನ್ನ ಉಡುಪನ್ನು ಎತ್ತಿ ಹೊಳೆಯನ್ನು ದಾಟು.
ನಿನ್ನ ದೇಶವನ್ನು ಬಿಟ್ಟುಹೋಗು.
3 ಪುರುಷರು ನಿನ್ನ ಶರೀರವನ್ನು ನೋಡಿ ನಿನ್ನೊಂದಿಗೆ
ಸಂಭೋಗಿಸುವರು. ನೀನು ಮಾಡಿದ ಕೆಟ್ಟಕಾರ್ಯ
ಗಳಿಗಾಗಿ ನೀನು ಶಿಕ್ಷಿಸಲ್ಪಡುವೆ. ಯಾರೂ ನಿನಗೆ
ಸಹಾಯ ಮಾಡಲು ಬರುವದಿಲ್ಲ.

4 'ದೇವರೇ , ನಮ್ಮನ್ನು ರಕ್ಷಿಸು. ಸರ್ವಶಕ್ತನಾದ
ಇಸ್ರೇಲರ ಪರಿಶುದ್ಧನೆಂಬುದೇ' ಆತನ ಹೆಸರು
ಎಂದು ನನ್ನ ಜನರು ಹೇಳುವರು.
5 ಆದುದರಿಂದ ಬಾಬಿಲೋನೇ, ಅಲ್ಲಿ ಸುಮ್ಮನೆ
ಕುಳಿತಿರು. ಕಸ್ದೀಯರ ಕುಮಾರಿಯೇ ಕತ್ತಲೆ
ಯೊಳಗೆ ಹೋಗಿ ಇರು, ಯಾಕೆಂದರೆ ನೀನು
ಜನಾಂಗಗಳ ರಾಣಿ ಎಂದು ಇನ್ನು ಮುಂದೆ
ಕರೆಯಲ್ಪಡುವದಿಲ್ಲ. ''

6 ''ನನ್ನ ಜನರ ಮೇಲೆ ನಾನು ಸಿಟ್ಟಿಗೆದ್ದಿದ್ದೆನು. ಅವರು
ನನಗೆ ಸೇರಿದವರಾಗಿದ್ದಾರೆ. ಆದರೆ ನಾನು ಅವರ
ಮೇಲೆ ಸಿಟ್ಟಾದೆನು. ಆದುದರಿಂದ ನಾನು ಅವರನ್ನು
ತಳ್ಳಿಬಿಟ್ಟೆನು. ಅವರನ್ನು ನಿನಗೆ ಕೊಟ್ಟೆನು. ನೀನು
ಅವರನ್ನು ಶಿಕ್ಷಿಸಿದೆ; ಅವರ ಮೇಲೆ ಕರುಣೆ ತೋರಿಸ
ಲಿಲ್ಲ. ವೃದ್ಧರೂ ಕಷ್ಟದ ಕೆಲಸ ಮಾಡುವಂತೆ
ಮಾಡಿದೆ.
7 'ನಾನು ನಿತ್ಯಕಾಲಕ್ಕೂ ವಾಸಿಸುತ್ತೇನೆ. ನಾನು
ಯಾವಾಗಲೂ ರಾಣಿಯಾಗಿಯೇ ಇರುವೆನು'
ಎಂದು ನೀನು ಹೇಳುವೆ. ಅವರಿಗೆ ನೀನು ಮಾಡಿದ
ದುಷ್ಟಕ್ರಿಯೆಗಳನ್ನು ನೀನು ಗಮನಿಸಲೇ ಇಲ್ಲ.

ಅದರ ಪರಿಣಾಮವನ್ನು ನೀನು ಆಲೋಚಿಸಲೇ
ಇಲ್ಲ.
8 ಆದುದರಿಂದ ‘ಕೋಮಲ ಸ್ತ್ರೀಯೇ,’ ನನ್ನ
ಮಾತನ್ನು ಕೇಳು. ಸುರಕ್ಷಿತಳಾಗಿರುವೆ ಎಂದು ನೆನಸಿ
ಕೊಂಡು ಹೀಗೆ ನಿನ್ನೊಳಗೆ, ‘‘ನಾನೇ ಮಹಾವ್ಯಕ್ತಿ.
ನನ್ನಂಥ ಮಹಾವ್ಯಕ್ತಿ ಯಾರೂ ಇಲ್ಲ. ನಾನೆಂದಿಗೂ
ವಿಧವೆಯಾಗುವದಿಲ್ಲ. ಯಾವಾಗಲೂ ನನಗೆ
ಮಕ್ಕಳಿರುವರು’’ ಎಂದುಕೊಳ್ಳುವೆ.
9 ಒಂದೇ ದಿನದೊಳಗೆ, ಒಂದೇ ಕ್ಷಣದಲ್ಲಿ ನಿನಗೆ
ಎರಡು ಸಂಗತಿಗಳು ಸಂಭವಿಸುತ್ತವೆ. ನೀನು ನಿನ್ನ
ಮಕ್ಕಳನ್ನು ಕಳೆದುಕೊಳ್ಳುವೆ, ಆ ಬಳಿಕ ನೀನು ನಿನ್ನ
ಗಂಡನನ್ನು ಕಳಕೊಳ್ಳುವೆ. ಹೌದು, ಈ ವಿಷಯ
ಗಳು ನಿನಗೆ ಖಂಡಿತವಾಗಿ ಸಂಭವಿಸುವವು. ನಿನ್ನಲ್ಲಿ
ರುವ ಎಲ್ಲಾ ಮಾಟಗಳು, ನಿನ್ನ ಮಂತ್ರಗಳು ನಿನ್ನನ್ನು
ಕಾಪಾಡಲಾರವು.
10 ನೀನು ದುಷ್ಟಕಾರ್ಯಗಳನ್ನು ಮಾಡುತ್ತಿರುವೆ,
ಆದರೂ ನೀನು ಸುರಕ್ಷಿತನಾಗಿದ್ದೇನೆ ಎಂದು
ಕೊಂಡಿರುವೆ. ‘ನಾನು ಮಾಡಿದ ದುಷ್ಟಕಾರ್ಯ
ಗಳನ್ನು ಯಾರೂ ನೋಡುವದಿಲ್ಲ’ ಎಂದು ನೀನು
ಭಾವಿಸಿಕೊಂಡಿರುವೆ. ನಿನ್ನ ಜ್ಞಾನ, ನಿನ್ನ ತಿಳುವಳಿಕೆ
ನಿನ್ನನ್ನು ಕಾಪಾಡುತ್ತವೆ ಎಂದು ತಿಳಿದು ಕೊಂಡಿ
ರುವೆ. ‘ನಾನೇ ಮಹಾವ್ಯಕ್ತಿ, ನನ್ನಂಥ ಮಹಾವ್ಯಕ್ತಿ
ಬೇರೆ ಯಾರೂ ಇಲ್ಲ’ ಎಂದು ನೀನು ಅಂದು
ಕೊಳ್ಳುವೆ.
11 ಆದರೆ ಸಂಕಟಗಳು ನಿನಗೆ ಪ್ರಾಪ್ತವಾಗುವವು. ಅವು
ಯಾವಾಗ ಸಂಭವಿಸುತ್ತವೆಯೆಂದು ನಿನಗೆ ತಿಳಿ
ಯದು. ಆದರೆ ದುರಂತವು ಸಂಭವಿಸುವದು. ಆ
ಸಂಕಟಗಳನ್ನು ನಿಲ್ಲಿಸಲು ನೀನು ಮಾಡುವ ಪ್ರಯ
ತ್ನವು ವಿಫಲವಾಗುವುದು. ಏನಾಯಿತು ಎಂದು
ನೀನು ತಿಳಿದುಕೊಳ್ಳುವಷ್ಟರಲ್ಲಿ ನಾಶವಾಗುವೆ.
12 ಮಾಟಮಂತ್ರಗಳನ್ನು ಕಲಿತುಕೊಳ್ಳುವುದರಲ್ಲೇ
ನಿನ್ನ ಜೀವಮಾನವನ್ನು ಕಳೆದಿರುವೆ. ಸರಿ, ತಂತ್ರ
ಮಂತ್ರಗಳನ್ನು ಮಾಡಲು ಪ್ರಾರಂಭಿಸು. ಒಂದು
ವೇಳೆ ಅವು ನಿನಗೆ ಸಹಾಯ ಮಾಡಬಹುದು.
ಒಂದು ವೇಳೆ ಕೆಲವರನ್ನು ನೀನು ಭಯ
ಪಡಿಸಬಹುದು.
13 ನಿನಗೆ ಅನೇಕಾನೇಕ ಸಲಹೆಗಾರರಿದ್ದಾರೆ. ಅವರು
ನಿನಗೆ ಕೊಡುವ ಸಲಹೆಗಳಿಂದ ನೀನು ಬೇಸರ
ಗೊಂಡಿರುವಿಯಾ? ಹಾಗಾದರೆ ನಿನ್ನಲ್ಲಿರುವ
ಖಗೋಳಶಾಸ್ತ್ರಜ್ಞರನ್ನು ಕರೆಯಿಸು. ತಿಂಗಳು
ಯಾವಾಗ ಪ್ರಾರಂಭವಾಗುತ್ತದೆಯೆಂದು ಅವರು
ಹೇಳಬಲ್ಲರು. ನಿನ್ನ ಸಂಕಟಗಳು ಯಾವಾಗ
ಪ್ರಾಪ್ತವಾಗುತ್ತವೆಯೆಂದು ಅವರು ನಿನಗೆ ತಿಳಿಸ
ಬಲ್ಲರು.
14 ಆದರೆ ಆ ಮನುಷ್ಯರಿಗೆ ತಮ್ಮನ್ನೇ ರಕ್ಷಿಸಲು ಅಸಾಧ್ಯ
ವಾಗುವದು. ಅವರು ಹುಲ್ಲಿನಂತೆ ಸುಟ್ಟುಹೋಗು
ವರು. ರೊಟ್ಟಿ ಸುಡಲು ಕೆಂಡಗಳು ಕಾಣಿಸ
ದಂತೆಯೂ ಚಳಿಕಾಯಿಕೊಳ್ಳಲು ಬೆಂಕಿ ಇರ
ದಂತೆಯೂ ಅವರು ಕ್ಷಣಕಾಲದಲ್ಲಿ ಸುಟ್ಟು
ಹೋಗುವರು.
15 ನೀನು ಕಷ್ಟಪಟ್ಟು ಗಳಿಸಿದ ಸಂಪತ್ತಿಗೆಲ್ಲಾ ಹಾಗೆಯೇ
ಆಗುವದು. ನಿನ್ನ ಜೀವಮಾನ ಕಾಲ ವೆಲ್ಲಾ
ವ್ಯವಹಾರ ನಡಿಸಿದ್ದ ಜನರೆಲ್ಲಾ ನಿನ್ನನ್ನು ತೊರೆದು
ಬಿಡುವರು. ಪ್ರತಿಯೊಬ್ಬನು ತನ್ನ ಸ್ವಂತ ದಾರಿ
ಹಿಡಿಯುವನು. ಆಗ ನಿನ್ನನ್ನು ರಕ್ಷಿಸಲು ಯಾರೂ
ಇರುವದಿಲ್ಲ.’’

## ಯೆಹೋವನು ಪ್ರಪಂಚವನ್ನು ಆಳುತ್ತಾನೆ

48 ಯೆಹೋವನು ಹೇಳುವದೇನೆಂದರೆ,
‘‘ಯಾಕೋಬನ ವಂಶದವರೇ, ನನ್ನ ಮಾತು
ಗಳನ್ನು ಕೇಳಿರಿ. ಜನರು ನಿಮ್ಮನ್ನು ಇಸ್ರೇಲ್ ಎಂದು
ಕರೆಯುತ್ತಾರೆ. ನೀವು ಯೆಹೂದದ ಕುಟುಂಬದ
ವರು. ನೀವು ಯೆಹೋವನ ಹೆಸರಿನಲ್ಲಿ ಒಡಂಬಡಿಕೆ
ಮಾಡಿಕೊಳ್ಳುವಿರಿ. ನೀವು ಯೆಹೋವನ
ನಾಮವನ್ನು ಸ್ತುತಿಸುವಿರಿ ಆದರೆ ನೀವು ಇವು
ಗಳನ್ನು ಮಾಡುವಾಗ ನಂಬಿಗಸ್ತರಾಗಿರುವದಿಲ್ಲ;
ಯಥಾರ್ಥರಾಗಿರುವ್ದಿಲ್ಲ.
2 ಹೌದು, ಅವರು ಪರಿಶುದ್ಧ ಪಟ್ಟಣದ ನಿವಾಸಿಗ
ಳಾಗಿದ್ದಾರೆ. ಅವರು ಇಸ್ರೇಲಿನ ದೇವರನ್ನು ಅವ
ಲಂಬಿಸಿಕೊಂಡಿದ್ದಾರೆ. ಸರ್ವಶಕ್ತನಾದ ಯೆಹೋ
ವನು ಎಂಬುದೇ ಆತನ ಹೆಸರು.
3 ಸಂಭವಿಸಲಿಕ್ಕಿರುವ ಸಂಗತಿಗಳ ಬಗ್ಗೆ ಬಹುಕಾಲದ
ಹಿಂದೇ ನಿಮಗೆ ತಿಳಿಸಿದ್ದೆನು. ಪಕ್ಕನೇ ಅವು ನೆರ
ವೇರುವಂತೆ ಮಾಡಿದೆನು.
4 ನೀವು ಹಠಮಾರಿಗಳಾಗಿದ್ದು ನಾನು ಹೇಳಿದ್ದನ್ನು
ನಂಬದೆ ಹೋದದ್ದರಿಂದ ನಾನು ಹಾಗೆ ಮಾಡಿ
ದೆನು. ನೀವು ಕಬ್ಬಿಣದಂತೆ ಬಗ್ಗದ ಹಠಮಾರಿಗ
ಳಾಗಿದ್ದಿರಿ. ಹಿತ್ತಾಳೆಯಂತೆ ಗಟ್ಟಿಯಾಗಿದ್ದಿರಿ.
5 ಸಂಭವಿಸಲಿರುವ ಸಂಗತಿಗಳನ್ನು ಬಹುಕಾಲದ
ಮೊದಲೇ ನಿಮಗೆ ತಿಳಿಸಿದ್ದೆನು. ಅವು ಸಂಭವಿಸು
ವದಕ್ಕಿಂತ ಎಷ್ಟೋ ಕಾಲದ ಮೊದಲೇ ತಿಳಿಸಿದೆನು.
ನೀವು, ‘ಇವುಗಳನ್ನು ಮಾಡಿದ್ದು ನಮ್ಮನಮ್ಮ

ವಿಗ್ರಹಗಳೇ, ನಮ್ಮ ಮರ ಮತ್ತು ಲೋಹದ ದೇವರುಗಳೇ ಅವುಗಳನ್ನು ಮಾಡಿದ್ದು' ಎಂದು ನೀವು ಹೇಳದಂತೆ ಮಾಡಿದೆನು.''

### ಇಸ್ರೇಲರನ್ನು ಶುದ್ಧೀಕರಿಸಲು ದೇವರು ಅವರನ್ನು ಶಿಕ್ಷಿಸುತ್ತಾನೆ

6 ''ನಡೆದದ್ದನ್ನು ನೀವು ಕಣ್ಣಾರೆ ನೋಡಿದಿರಿ; ಕಿವಿಯಾರೆ ಕೇಳಿದಿರಿ. ಆದುದರಿಂದ ನೀವು ಇತರರಿಗೆ ಸುದ್ದಿಯನ್ನು ತಿಳಿಸಬೇಕು. ನೀವು ಈವರೆಗೆ ತಿಳಿಯದಿರುವ ವಿಷಯಗಳನ್ನು ಈಗ ನಿಮಗೆ ತಿಳಿಸುವೆನು.
7 ಇವು ಬಹಳ ಕಾಲದ ಹಿಂದೆ ನಡೆದ ವಿಷಯಗಳಲ್ಲ. ಇವು ಈಗ ಸಂಭವಿಸುವ ವಿಷಯಗಳು. ಈ ದಿವಸಕ್ಕೆ ಮೊದಲು ನೀವು ಇದನ್ನು ಕೇಳಲಿಲ್ಲ. ಆದುದರಿಂದ 'ನಮಗೆ ಇದೆಲ್ಲಾ ಗೊತ್ತಿದೆ' ಎಂದು ನೀವು ಹೇಳಲಾಗದು.
8 ಆದರೆ ನಾನು ಇವುಗಳನ್ನು ತಿಳಿಸಿದ ಮೇಲೂ ನೀವು ನನ್ನ ಮಾತನ್ನು ಕೇಳದೆ ಹೋದಿರಿ. ನೀವು ನನ್ನಿಂದ ಕಲಿತದ್ದು ಏನಿಲ್ಲ. ನಾನು ಏನು ಹೇಳಿದರೂ ನೀವು ಕೇಳಲಿಲ್ಲ. ಪ್ರಾರಂಭದಿಂದಲೇ ನೀವು ನನಗೆ ವಿರುದ್ಧವಾಗುವಿರಿ ಎಂದು ನಾನು ತಿಳಿದಿದ್ದೆನು. ನೀವು ಹುಟ್ಟಿದಾಗಿನಿಂದಲೇ ನನಗೆ ದಂಗೆ ಎದ್ದಿರುವಿರಿ.
9 ಆದರೆ ನಾನು ತಾಳ್ಮೆಯಿಂದಿರುವೆನು. ನಾನು ಇದನ್ನು ನನ್ನ ಹೆಸರಿನ ನಿಮಿತ್ತ ಮಾಡವೆನು. ನಾನು ನಿಮ್ಮ ಮೇಲೆ ಕೋಪಗೊಂಡು ನಾನು ನಾಶ ಮಾಡದೆ ಇದ್ದುದಕ್ಕಾಗಿ ಜನರು ನನ್ನನ್ನು ಸ್ತುತಿಸುವರು. ನನ್ನ ತಾಳ್ಮೆಗಾಗಿ ನೀವು ನನ್ನನ್ನು ಕೊಂಡಾಡುವಿರಿ.

10 ಇಗೋ ನಾನು ನಿಮ್ಮನ್ನು ಶುದ್ಧೀಕರಿಸುತ್ತೇನೆ. ಜನರು ಬೆಳ್ಳಿಯನ್ನು ಬೆಂಕಿಯಿಂದ ಶುದ್ಧೀಕರಿಸುತ್ತಾರೆ. ಆದರೆ ನಾನು ಸಂಕಟಗಳಿಂದ ಶುದ್ಧೀಕರಿಸುವೆನು.
11 ನಾನು ಇದನ್ನು ನನಗಾಗಿ ಮಾಡುವೆನು. ನಾನು ನಿಮ್ಮನ್ನು ಪ್ರಾಮುಖ್ಯವಾದ ವ್ಯಕ್ತಿಗಳೆಂದು ಪರಿಗಣಿಸುವುದಿಲ್ಲ. ನನ್ನ ಮಹಿಮೆಯನ್ನು, ನನಗೆ ಸಲ್ಲತಕ್ಕ ಸ್ತುತಿಯನ್ನು ತೆಗೆದುಕೊಳ್ಳಲು ನಾನು ಸುಳ್ಳು ದೇವರುಗಳಿಗೆ ಅವಕಾಶ ಕೊಡುವುದಿಲ್ಲ.
12 ಯಾಕೋಬೇ, ನನ್ನನ್ನು ಕೇಳು. ಇಸ್ರೇಲೇ, ನೀವು ನನ್ನ ಜನರಾಗುವದಕ್ಕಾಗಿ ನಿಮ್ಮನ್ನು ನಾನು ಕರೆದೆನು. ಆದುದರಿಂದ ನನ್ನ ಮಾತುಗಳನ್ನು ಕೇಳಿರಿ. ನಾನೇ ಆದಿಯೂ ಅಂತ್ಯವೂ ಆಗಿದ್ದೇನೆ.
13 ಭೂಮಿಯನ್ನು ನನ್ನ ಕೈಗಳಿಂದಲೇ ನಿರ್ಮಿಸಿದೆನು. ನನ್ನ ಬಲಗೈಯು ಆಕಾಶವನ್ನು ಉಂಟುಮಾಡಿತು. ನಾನು ಅವುಗಳನ್ನು ಕರೆದಾಗ ಅವು ನನ್ನ ಬಳಿಗೆ ಬರುವವು.
14 ನೀವೆಲ್ಲರೂ ನನ್ನ ಬಳಿಗೆ ಬಂದು ನನ್ನ ಮಾತುಗಳನ್ನು ಕೇಳಿರಿ. ಸುಳ್ಳುದೇವರುಗಳಲ್ಲಿ ಯಾರಾದರೂ ಈ ವಿಷಯಗಳು ಸಂಭವಿಸುತ್ತವೆಯೆಂದು ಹೇಳಿರುವರೆ ಇಲ್ಲ!'' ಯೆಹೋವನು ಆರಿಸಿದ ಮನುಷ್ಯನು ಬಾಬಿಲೋನಿಗೂ ಕಸ್ದೀಯರಿಗೂ ತನ್ನ ಇಷ್ಟಬಂದ ಹಾಗೆ ಮಾಡುವನು.
15 ನಾನು ಅವನನ್ನು ಕರೆಯುವುದಾಗಿ ಹೇಳಿದ್ದೇನೆ. ನಾನು ಅವನನ್ನು ಕರೆದುತರುವೆನು; ಅವನಿಗೆ ಜಯವನ್ನು ಅನುಗ್ರಹಿಸುವೆನು.
16 ನನ್ನ ಬಳಿಗೆ ಬಂದು ನನ್ನ ಮಾತು ಕೇಳಿರಿ! ಬಾಬಿಲೋನ್ ಒಂದು ದೇಶವಾಗಿ ಪರಿಣಮಿಸುವಾಗ ನಾನು ಅಲ್ಲಿದ್ದೆನು. ಪ್ರಾರಂಭದಿಂದಲೇ ನಾನು ಸ್ಪಷ್ಟವಾಗಿ ಹೇಳಿದ್ದೇನೆ. ಜನರಿಗೆ ಅರ್ಥವಾಗುವ ರೀತಿಯಲ್ಲಿ ಹೇಳಿದ್ದೇನೆ.''

ಯೆಶಾಯನು ಹೇಳಿದ್ದೇನಂದರೆ: ''ಈಗ ನನ್ನ ಒಡೆಯನಾದ ಯೆಹೋವನೂ ಆತನ ಆತ್ಮನೂ ಈ ವಿಷಯಗಳನ್ನು
ತಿಳಿಸಲು ನನ್ನನ್ನು ಕಳುಹಿಸಿದ್ದಾನೆ. 17 ರಕ್ಷಕನೂ ಇಸ್ರೇಲರ
ಪರಿಶುದ್ಧನೂ ಆಗಿರುವ ಯೆಹೋವನು ಹೇಳುವದೇನೆಂದರೆ,

''ನಾನೇ ನಿನ್ನ ದೇವರಾದ ಯೆಹೋವನು. ಯಾವದು ಒಳ್ಳೆಯದೋ, ಪ್ರಯೋಜನಕರವೋ ಅದನ್ನು ಮಾಡಲು ನಿಮಗೆ ಕಲಿಸುತ್ತೇನೆ. ನೀವು ಹೋಗಲೇಬೇಕಾದ ದಾರಿಯಲ್ಲಿ ನಿಮ್ಮನ್ನು ನಡಿಸುವೆನು.
18 ನೀವು ನನಗೆ ವಿಧೇಯರಾಗುತ್ತಿದ್ದರೆ ತುಂಬಿ ಹರಿಯುವ ಹೊಳೆಯಂತೆ ಸಮಾಧಾನವು ನಿಮಗೆ ದೊರಕುತ್ತಿತ್ತು. ಸಮುದ್ರದ ತೆರೆಯಂತೆ ಮೇಲಿಂದ ಮೇಲೆ ನಿಮಗೆ ಒಳ್ಳೆಯವುಗಳು ಬರುತ್ತಿದ್ದವು.
19 ನೀವು ನನಗೆ ವಿಧೇಯರಾಗಿರುತ್ತಿದ್ದರೆ, ನಿಮ್ಮ ಸಂತಾನವು ಅಭಿವೃದ್ಧಿಯಾಗುತ್ತಿತ್ತು. ಅವರು ಸಮುದ್ರದ ಮರಳಿನಂತೆ ಅಸಂಖ್ಯಾತರಾಗಿರುತ್ತಿದ್ದರು. ನೀವು ನನಗೆ ವಿಧೇಯರಾಗಿದ್ದರೆ, ನೀವು ನಾಶವಾಗಿರುತ್ತಿರಲಿಲ್ಲ ಮತ್ತು ನನ್ನೆದುರಿನಿಂದ ನಿಮ್ಮ ಹೆಸರು ತೆಗೆದುಹಾಕಲ್ಪಡುತ್ತಿರಲಿಲ್ಲ.''
20 ನನ್ನ ಜನರೇ, ಬಾಬಿಲೋನನ್ನು ತೊರೆಯಿರಿ. ನನ್ನ ಜನರೇ, ಕಸ್ದೀಯರಿಂದ ಓಡಿಹೋಗಿರಿ. ಈ ವರ್ತಮಾನವನ್ನು ಜನರಿಗೆ ಹರ್ಷಿಸುತ್ತಾ ತಿಳಿಸಿರಿ.

ಲೋಕದ ಕಟ್ಟಕಡೆಯ ಸ್ಥಳದಲ್ಲೂ ಈ ವರ್ತಮಾನ
ವನ್ನು ಪ್ರಕಟಿಸಿರಿ. ''ಯಾಕೋಬನನ್ನು ಯೆಹೋ
ವನು ರಕ್ಷಿಸಿದ''ನೆಂದು ಜನರಿಗೆಲ್ಲಾ ತಿಳಿಸಿರಿ.
21 ''ಯೆಹೋವನು ತನ್ನ ಜನರನ್ನು ಮರುಭೂಮಿ
ಯಲ್ಲಿ ನಡೆಸಿಕೊಂಡು ಬಂದನು. ಜನರು
ಬಾಯಾರಲಿಲ್ಲ; ಯಾಕೆಂದರೆ ಆತನು ಬಂಡೆ
ಯಿಂದ ನೀರು ಹರಿಯುವಂತೆ ಮಾಡಿದನು.
ಆತನು ಬಂಡೆಯನ್ನು ಇಬ್ಭಾಗ ಮಾಡಿದಾಗ ನೀರು
ಅದರೊಳಗಿಂದ ಹರಿಯಿತು.''
22 ಆದರೆ ಯೆಹೋವನು ಹೇಳುವದೇನೆಂದರೆ,
''ದುಷ್ಟರಿಗೆ ಸಮಾಧಾನವೇ ಸಿಗದು.''

## ದೇವರು ತನ್ನ ವಿಶೇಷ ಸೇವಕನನ್ನು ಕರೆಯುತ್ತಾನೆ

49 ದೂರದೇಶದಲ್ಲಿರುವ ಜನರೇ, ನನ್ನ ಮಾತು
ಗಳಿಗೆ ಕಿವಿಗೊಡಿರಿ; ಭೂಮಿಯ ಮೇಲೆ
ವಾಸಿಸುವ ಜನರೇ, ನನ್ನ ಮಾತುಗಳನ್ನು ಕೇಳಿರಿ.
ನಾನು ಹುಟ್ಟುವ ಮೊದಲೇ ಯೆಹೋವನು
ನನ್ನನ್ನು ತನ್ನ ಸೇವೆಗಾಗಿ ಕರೆದನು. ನಾನು
ತಾಯಿಯ ಗರ್ಭದಲ್ಲಿರುವಾಗಲೇ ಯೆಹೋವನು
ನನ್ನ ಹೆಸರೆತ್ತಿ ಕರೆದನು.
2 ತನ್ನ ಪರವಾಗಿ ಮಾತನಾಡಲು ಯೆಹೋವನು
ನನ್ನನ್ನು ಉಪಯೋಗಿಸುತ್ತಾನೆ. ಹದವಾದ ಕತ್ತಿ
ಯಂತೆ ನನ್ನನ್ನು ಉಪಯೋಗಿಸುತ್ತಾನೆ. ಅದೇ
ಸಮಯದಲ್ಲಿ ನನ್ನನ್ನು ತನ್ನ ಕೈಯೊಳಗೆ ಸುರಕ್ಷಿತ
ವಾಗಿ ಇರಿಸುತ್ತಾನೆ. ಯೆಹೋವನು ನನ್ನನ್ನು ಬಾಣ
ದಂತೆ ಉಪಯೋಗಿಸುತ್ತಾನೆ, ಬತ್ತಳಿಕೆಯಲ್ಲಿ
ನನ್ನನ್ನು ಅಡಗಿಸಿಡುತ್ತಾನೆ.
3 ಯೆಹೋವನು ಹೀಗಂದನು; ''ಇಸ್ರೇಲೇ, ನೀನೇ
ನನ್ನ ಸೇವಕನು. ನಾನು ನಿನಗೆ ಆಶ್ಚರ್ಯವಾದ
ಕಾರ್ಯಗಳನ್ನು ಮಾಡುವೆನು.
4 ಆಗ ನಾನು 'ನಾನು ಕಷ್ಟಪಟ್ಟು ಮಾಡಿದ ಕಾರ್ಯ
ಗಳೆಲ್ಲವೂ ನಿಷ್ಪ್ರಯೋಜಕವಾದವು. ನಾನು ನಿನ್ನನ್ನೇ
ಸವೆಯಿಸಿದೆನು. ಆದರೆ ಪ್ರಯೋಜನವಾದದ್ದನ್ನು
ನಾನು ಮಾಡಲಿಲ್ಲ. ನಾನು ನನ್ನ ಶಕ್ತಿಯನ್ನೆಲ್ಲಾ
ಉಪಯೋಗಿಸಿದರೂ ಏನೂ ಮಾಡಲಿಲ್ಲ. ಆದುದ
ರಿಂದ ನನಗೆ ಮಾಡಬೇಕಾದುದನ್ನು ಯೆಹೋ
ವನೇ ತೀರ್ಮಾನಿಸಲಿ. ನನಗೆ ದೊರಕಬೇಕಾದ
ಬಹುಮಾನವನ್ನು ದೇವರೇ ತೀರ್ಮಾನಿಸಲಿ.
5 ನಾನು ಯೆಹೋವನ ಸೇವಕನಾಗಿರಬೇಕೆಂದು
ಆತನು ನನ್ನನ್ನು ನನ್ನ ತಾಯಿಯ ಗರ್ಭದಲ್ಲಿಯೇ
ರೂಪಿಸಿದನು. ಇಸ್ರೇಲರನ್ನೂ ಯಾಕೋಬನನ್ನೂ
ಆತನ ಬಳಿಗೆ ಮತ್ತೆ ಕರೆದುಕೊಂಡು ಬರಲು ಆತನು
ನನ್ನನ್ನು ರೂಪಿಸಿದನು. ಯೆಹೋವನು ನನ್ನನ್ನು
ಸನ್ಮಾನಿಸುವನು. ನಾನು ಆತನಿಂದ ಬಲವನ್ನು
ಹೊಂದುವೆನು.''
6 ಯೆಹೋವನು ನನಗೆ ಹೇಳಿದ್ದೇನಂದರೆ: ''ನನ್ನ
ಸೇವಕನಾದ ಯಾಕೋಬನ ಕುಲಗಳನ್ನು ಮೇಲೆತ್ತಿ
ಇಸ್ರೇಲಿನ ಅಳಿದುಳಿದವರನ್ನು ಪುನರ್‌ಸ್ಥಾಪಿಸುವೆ.
ಆದರೆ ನಿನಗೆ ಇನ್ನೊಂದು ಕೆಲಸವಿದೆ. ಅದು ಇದ
ಕ್ಕಿಂತಲೂ ಮಹತ್ತಾದದ್ದು. ನಾನು ನಿನ್ನನ್ನು ಎಲ್ಲಾ
ಜನಾಂಗಗಳಿಗೆ ಬೆಳಕನ್ನಾಗಿ ಮಾಡುವೆನು.
ಲೋಕದ ಎಲ್ಲಾ ಜನರನ್ನು ರಕ್ಷಿಸಲು ನೀನು ನನ್ನ
ಮಾರ್ಗವಾಗುವೆ.''
7 ಇಸ್ರೇಲಿನ ಪರಿಶುದ್ಧನಾದ ಯೆಹೋವನು ಇಸ್ರೇ
ಲನ್ನು ಬಿಡಿಸುವನು. ಆತನು ಹೇಳುವದೇನೆಂದರೆ,
'ನನ್ನ ಸೇವಕನು ದೀನನಾಗಿದ್ದಾನೆ. ಆತನು ಅರಸ
ರನ್ನು ಸೇವಿಸುವನು. ಆದರೆ ಜನರು ಆತನನ್ನು
ದ್ವೇಷಿಸುವರು. ಆದರೆ ರಾಜರುಗಳು ಅವನನ್ನು
ನೋಡಿ ಎದ್ದುನಿಂತು ಗೌರವಿಸುವರು. ಶ್ರೇಷ್ಠ
ನಾಯಕರು ಆತನ ಮುಂದೆ ಅಡ್ಡಬೀಳುವರು.''
ಇದು ಇಸ್ರೇಲರ ಪರಿಶುದ್ಧನಾದ ಯೆಹೋವನ
ಚಿತ್ತಕ್ಕನುಸಾರವಾಗಿದೆ. ಆತನು ಭರವಸೆಗೆ ಯೋಗ್ಯ
ನಾಗಿದ್ದಾನೆ. ಆತನೇ ನಿನ್ನನ್ನು ಆರಿಸಿ
ಕೊಂಡನು.

## ರಕ್ಷಣೆಯ ದಿನ

8 ಯೆಹೋವನು ಹೇಳುವದೇನೆಂದರೆ, ''ನನ್ನ ದಯೆ
ಯನ್ನು ತೋರಿಸಲು ಒಂದು ವಿಶೇಷ ಸಮಯ
ವಿದೆ. ಆಗ ನಾನು ನಿನ್ನ ಪಾರ್ಥನೆಗೆ ಉತ್ತರ ಕೊಡು
ವೆನು. ನಿನ್ನನ್ನು ರಕ್ಷಿಸಲು ಒಂದು ವಿಶೇಷ ಸಮಯ
ವಿದೆ. ಆಗ ನಾನು ನಿನಗೆ ಸಹಾಯಮಾಡುವೆನು,
ನಿನ್ನನ್ನು ಕಾಪಾಡುವೆನು. ಜನರೊಂದಿಗೆ ನಾನು
ಒಡಂಬಡಿಕೆ ಮಾಡಿಕೊಂಡಿದ್ದೇನೆ ಎಂಬುದಕ್ಕೆ
ನೀನೇ ಸಾಕ್ಷಿಯಾಗಿರುವೆ. ದೇಶವು ಈಗ ನಾಶ
ವಾಗಿದೆ ಆದರೆ ಈ ಭೂಮಿಯು ಯಾರದಾಗಿತ್ತೋ
ಅವರಿಗೆ ನೀನದನ್ನು ಹಿಂದಕ್ಕೆ ಕೊಡುವೆ.
9 ಸೆರೆಮನೆಯೊಳಗೆ ಇರುವವರಿಗೆ ನೀವು 'ಸೆರೆಮನೆ
ಯಿಂದ ಹೊರಗೆ ಬನ್ನಿರಿ' ಎಂದು ಹೇಳುವಿರಿ.
ಅಂಧಕಾರದಲ್ಲಿರುವವರಿಗೆ, ಕತ್ತಲೆಯಿಂದ
ಹೊರಗೆ ಬನ್ನಿರಿ ಎಂದು ಹೇಳುವಿರಿ. ಪ್ರಯಾಣ
ದಲ್ಲಿರುವವರು ತಿನ್ನುತ್ತಾ ಹೋಗುವರು ಬೆಂಗಾಡಿ
ನಲ್ಲೂ ನಿಮಗೆ ಆಹಾರ ದೊರೆಯುವದು.

10 ಜನರಿಗೆ ಹಸಿವೆಯಾಗದು, ಬಾಯಾರಿಕೆ
ಯಾಗದು. ಸೂರ್ಯನ ಉರಿ ಬಿಸಿಲಾಗಲೀ ಗಾಳಿ
ಯಾಗಲೀ ಅವರಿಗೆ ಹಾನಿಮಾಡದು. ಯಾಕೆಂದರೆ
ದೇವರು ತಾನೇ ಅವರನ್ನು ಸಂತೈಸುವನು,
ಅವರನ್ನು ಬುಗ್ಗೆಗಳ ಬಳಿಗೆ ನಡಿಸುವನು.
11 ನಾನು ನನ್ನ ಜನರಿಗೊಂದು ಮಾರ್ಗ ಸಿದ್ಧ ಮಾಡು
ವೆನು. ಬೆಟ್ಟವು ನೆಲದ ಮಟ್ಟಕ್ಕೆ ಇಳಿಯುವುದು;
ತಗ್ಗು ಏರಿಸಲ್ಪಡುವದು.
12 ಇಗೋ, ದೂರದೇಶಗಳಿಂದ ಜನರು ನನ್ನ ಬಳಿಗೆ
ಬರುತ್ತಿದ್ದಾರೆ. ಉತ್ತರ ಪಶ್ಚಿಮ ದಿಕ್ಕುಗಳಿಂದ
ಜನರು ನನ್ನ ಬಳಿಗೆ ಬರುತ್ತಿದ್ದಾರೆ. ಈಜಿಪ್ಟಿನ
ಅಸ್ವಾನಿನಿಂದ ಜನರು ನನ್ನ ಬಳಿಗೆ ಬರುತ್ತಿದ್ದಾರೆ.''
13 ಭೂಮ್ಯಾಕಾಶಗಳೇ, ಸಂತೋಷಪಡಿರಿ. ಪರ್ವತ
ಗಳೇ, ಹರ್ಷಧ್ವನಿ ಮಾಡಿರಿ. ಯಾಕೆಂದರೆ
ಯೆಹೋವನು ತನ್ನ ಜನರನ್ನು ಸಂತೈಸುತ್ತಾನೆ.
ಆತನು ಬಡವರಿಗೆ ಕರುಣೆ ತೋರಿಸುತ್ತಾನೆ.

### ಚೀಯೋನ್ ತೊರೆಯಲ್ಪಟ್ಟ ಸ್ತ್ರೀ

14 ಆದರೆ ಈಗ ಚೀಯೋನ್ ಹೇಳುವದೇನೆಂದರೆ,
''ಯೆಹೋವನು ನನ್ನನ್ನು ಬಿಟ್ಟುಹೋಗಿದ್ದಾನೆ.
ನನ್ನ ಒಡೆಯನು ನನ್ನನ್ನು ತೊರೆದಿದ್ದಾನೆ.''
15 ಆದರೆ ನಾನು ಹೇಳುವದೇನೆಂದರೆ, ''ಒಬ್ಬ
ತಾಯಿಯು ತನ್ನ ಮಗುವನ್ನು ಮರೆತಾಳೇ? ಇಲ್ಲ,
ತಾನು ಹೆತ್ತ ಶಿಶುವನ್ನು ತಾಯಿಯು ಮರೆತು ಬಿಡು
ವಳೇ? ಇಲ್ಲ. ಒಬ್ಬ ಸ್ತ್ರೀ ತನ್ನ ಮಕ್ಕಳನ್ನು ಮರೆ
ಯುವ ದಿಲ್ಲ. ಯೆಹೋವನಾದ ನಾನೂ ನಿಮ್ಮನ್ನು
ಮರೆಯುವದಿಲ್ಲ.
16 ನೋಡಿ, ನಿಮ್ಮ ಹೆಸರುಗಳನ್ನು ನಾನು ನನ್ನ ಅಂಗೈ
ಗಳಲ್ಲಿ ಕೆತ್ತಿರುತ್ತೇನೆ. ನಿಮ್ಮನ್ನು ಯಾವಾಗಲೂ
ಜ್ಞಾಪಿಸಿಕೊಳ್ಳುತ್ತೇನೆ.
17 ನಿನ್ನ ಮಕ್ಕಳು ನಿನ್ನ ಬಳಿಗೆ ಹಿಂದಿರುಗಿ ಬರುವರು.
ಜನರು ನಿಮ್ಮನ್ನು ಸೋಲಿಸಿದರೂ ಅವರು
ನಿಮ್ಮನ್ನು ನಿಮ್ಮಷ್ಟಕ್ಕೆ ಬಿಡುವರು.''

### ಇಸ್ರೇಲ್ ಜನರು ಹಿಂದಿರುಗುವರು

18 ಮೇಲಕ್ಕೆ ನೋಡಿ! ನಿಮ್ಮ ಸುತ್ತಲೂ ನೋಡಿ! ನಿಮ್ಮ
ಮಕ್ಕಳೆಲ್ಲಾ ಒಟ್ಟಾಗಿ ನಿಮ್ಮ ಬಳಿಗೆ ಬರುತ್ತಿದ್ದಾರೆ.
ಯೆಹೋವನು ಹೇಳುವದೇನೆಂದರೆ, ''ನನ್ನ ಜೀವ
ದಾಣೆ, ನಿಮ್ಮ ಮಕ್ಕಳು ನೀವು ಕೊರಳಲ್ಲಿ ಧರಿಸುವ
ಹಾರದಂತಿರುವರು. ಮದುಮಗಳು ಧರಿಸುವ
ಕಂಠಹಾರದಂತೆ ನಿಮ್ಮ ಮಕ್ಕಳಿರುವರು.
19 ಈಗ ನೀವು ಸೋತವರೂ ನಾಶವಾದವರೂ ಆಗಿರು
ವಿರಿ. ನಿಮ್ಮ ಭೂಮಿಯು ನಿಷ್ಪ್ರಯೋಜಕವಾಗಿದೆ.
ಆದರೆ ಸ್ವಲ್ಪ ಸಮಯದ ನಂತರ ನಿಮ್ಮ ದೇಶವು
ಜನರಿಂದ ತುಂಬುವದು. ನಿಮ್ಮನ್ನು ನಾಶ ಮಾಡಿದ
ವರು ಬಹುದೂರ ಹೋಗುವರು.
20 ಕಳೆದುಹೋದ ನಿಮ್ಮ ಮಕ್ಕಳಿಗಾಗಿ ನೀವು ವ್ಯಸನ
ವಾಗಿದ್ದೀರಿ. ಆದರೆ ಆ ಮಕ್ಕಳು, ''ಈ ದೇಶವು
ನಮಗೆ ಸಾಲುವದಿಲ್ಲ. ಇದಕ್ಕಿಂತ ದೊಡ್ಡ ದೇಶ
ನಮಗೆ ಕೊಡಿ'' ಎಂದು ಕೇಳುವರು.
21 ಆಗ ನೀವು ಈ ಮಕ್ಕಳನ್ನೆಲ್ಲಾ ನಮಗೆ ಯಾರು
ಕೊಟ್ಟರು? ಇದು ಸಂತಸದ ಸಂಗತಿ! ನಾನು ಒಬ್ಬಂ
ಟಿಗನಾಗಿ ದುಃಖಿಸುತ್ತಿದ್ದೆನು. ನಾನು ಸೋಲಲ್ಪಟ್ಟ
ವನಾಗಿ ನನ್ನ ಜನರಿಂದ ದೂರವಿದ್ದೆನು. ಹೀಗಿರು
ವಾಗ ಈ ಮಕ್ಕಳನ್ನೆಲ್ಲಾ ಯಾರು ಕೊಟ್ಟರು? ನಾನು
ಒಬ್ಬಂಟಿಗನಾಗಿ ಇದ್ದೆನಲ್ಲಾ! ಇಷ್ಟೆಲ್ಲಾ ಮಕ್ಕಳನ್ನು
ನನಗೆ ಕೊಟ್ಟವರು ಯಾರು?''
22 ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ''ನಾನು ಜನಾಂಗಗಳಿಗೆ ಕೈಬೀಸಿ ಸನ್ನೆ
ಮಾಡುವೆನು. ಎಲ್ಲಾ ಜನರು ನೋಡುವಂತೆ ನಾನು
ನನ್ನ ಧ್ವಜವನ್ನು ಎತ್ತುವೆನು. ಆಗ ಅವರು ನಿನ್ನ
ಮಕ್ಕಳನ್ನು ನಿನಗೆ ತಂದೊಪ್ಪಿಸುವರು. ಅವರು ನಿನ್ನ
ಮಕ್ಕಳನ್ನು ಹೆಗಲ ಮೇಲೆ ಕುಳ್ಳಿರಿಸಿಕೊಂಡು ತರು
ವರು. ತಮ್ಮ ಕೈಗಳಲ್ಲಿ ಅವರನ್ನು ಎತ್ತಿಕೊಂಡು
ಬರುವರು.
23 ನಿನ್ನ ಮಕ್ಕಳಿಗೆ ಅರಸರು ಉಪಾಧ್ಯಾಯರಾಗಿರು
ವರು. ರಾಜಪುತ್ರಿಯರು ನಿನ್ನ ಮಕ್ಕಳನ್ನು ನೋಡಿ
ಕೊಳ್ಳುವರು. ಆ ಅರಸರೂ ರಾಜಪುತ್ರಿಯರೂ
ನಿನಗಡ್ಡಬೀಳುವರು. ನಿನ್ನ ಕಾಲಿನ ಧೂಳಿಗೆ
ಮುತ್ತುಕೊಡುವರು. ಆಗ ನಾನು ಯೆಹೋವ
ನೆಂದು ನೀವು ತಿಳಿದುಕೊಳ್ಳುವಿರಿ. ನನ್ನ ಮೇಲೆ
ಭರವಸವಿಡುವವನು ಅಶಾಭಂಗಪಡನು ಎಂದು
ಆಗ ನೀವು ತಿಳಿದುಕೊಳ್ಳುವಿರಿ.''
24 ಯುದ್ಧವೀರನು ಯುದ್ಧದಲ್ಲಿ ಕೊಳ್ಳೆಹೊಡೆದ
ದ್ದನ್ನು ನೀವು ಅವನಿಂದ ಕಿತ್ತುಕೊಳ್ಳಲಾರಿರಿ. ಬಲಿಷ್ಠ
ಸೈನಿಕನು ಯುದ್ಧಕೈದಿಯನ್ನು ಕಾವಲು ಕಾಯು
ವಾಗ ಆ ಕೈದಿಯು ತಪ್ಪಿಸಿಕೊಳ್ಳಲಾರನು.
25 ಆದರೆ ಯೆಹೋವನು ಹೇಳುವದೇನೆಂದರೆ, ಕೈದಿ
ಗಳು ತಪ್ಪಿಸಿಕೊಳ್ಳುವರು. ಬಲಿಷ್ಠ ಸೈನಿಕನಿಂದ
ಯಾರೋ ಒಬ್ಬನು ಕೈದಿಯನ್ನು ಬಿಡಿಸಿಕೊಳ್ಳು
ವನು. ಇದು ಹೇಗೆ ಸಾಧ್ಯ? ಹೇಗೆಂದರೆ,ನಾನೇ ನಿನ್ನ
ಬದಲಾಗಿ ಯುದ್ಧ ಮಾಡುವೆನು; ನಿನ್ನ ಮಕ್ಕಳನ್ನು
ರಕ್ಷಿಸುವೆನು.

26 ನಿಮ್ಮನ್ನು ಹಿಂಸಿಸುವವರು ತಮ್ಮ ದೇಹದ ಮಾಂಸ
ವನ್ನೇ ತಿನ್ನುವಂತೆ ಮಾಡುವೆನು; ದ್ರಾಕ್ಷಾರಸವನ್ನು
ಕುಡಿಯುವಂತೆ ತಮ್ಮ ಸ್ವಂತ ರಕ್ತವನ್ನೇ ಕುಡಿಸಿ
ಅಮಲೇರಿಸುವೆನು; ಆಗ ಯೆಹೋವನೇ ನಿಮ್ಮನ್ನು
ರಕ್ಷಿಸಿದನೆಂದು ಜನರೆಲ್ಲರೂ ತಿಳಿದುಕೊಳ್ಳುವರು.
ಯಾಕೋಬನ ಸರ್ವಶಕ್ತನಾದ ದೇವರು ನಿಮ್ಮನ್ನು
ರಕ್ಷಿಸಿದನೆಂದು ಎಲ್ಲರೂ ತಿಳಿಯುವರು.''

### ಜನರು ಪಾಪ ಮಾಡಿದ್ದರಿಂದ ಇಸ್ರೇಲು ಶಿಕ್ಷಿಸಲ್ಪಟ್ಟಿತು

50 ಯೆಹೋವನು ಹೇಳುವದೇನೆಂದರೆ;
''ಇಸ್ರೇಲ್ ಜನರೇ, ನೀವು ನಿಮ್ಮ ತಾಯಿ
ಯಾದ ಜೆರುಸಲೇಮಿಗೆ ವಿವಾಹ ವಿಚ್ಛೇದನ
ಕೊಟ್ಟಿರುವುದಾಗಿ ಹೇಳುತ್ತೀರಿ. ಆದರೆ ನಾನು
ಆಕೆಗೆ ವಿವಾಹ ವಿಚ್ಛೇದನ ಕೊಟ್ಟಿರುವುದಕ್ಕೆ
ದಾಖಲೆ ಪತ್ರವೆಲ್ಲಿದೆ? ನನ್ನ ಮಕ್ಕಳೇ, ನಿಮ್ಮಲ್ಲಿ
ಯಾರಿಗಾದರೂ ನಾನು ಸಾಲ ತೀರಿಸಬೇಕಿತ್ತೇ?
ಆ ಸಾಲವನ್ನು ತೀರಿಸಲು ನಾನು ನಿಮ್ಮನ್ನು ಮಾರಿ
ದ್ದೆನೋ. ಇಲ್ಲ. ನಾನು ನಿಮ್ಮನ್ನು ಮಾರಿಬಿಟ್ಟಿದ್ದು
ನೀವು ಮಾಡಿದ ದುಷ್ಟತನಕ್ಕಾಗಿಯೇ. ನಿಮ್ಮ ತಾಯಿ
ಯನ್ನು (ಜೆರುಸಲೇಮನ್ನು) ಕಳುಹಿಸಿಬಿಟ್ಟದ್ದು
ನಿಮ್ಮ ಅಪರಾಧಗಳಿಗಾಗಿಯೇ.
2 ನಾನು ಮನೆಗೆ ಬಂದಾಗ ಅಲ್ಲಿ ಯಾರೂ ಇರಲಿಲ್ಲ.
ನಾನು ಎಷ್ಟು ಕರೆದರೂ ಯಾರೂ ಉತ್ತರ ಕೊಡ
ಲಿಲ್ಲ. ನಿಮ್ಮನ್ನು ರಕ್ಷಿಸಲು ನನ್ನಿಂದ ಸಾಧ್ಯವಿಲ್ಲ
ವೆಂದು ನೀವು ನೆನಸುತ್ತೀರಾ? ನಿಮ್ಮ ಎಲ್ಲಾ
ಕಷ್ಟಗಳಿಂದ ನಿಮ್ಮನ್ನು ಪಾರುಮಾಡಲು ನನಗೆ
ಸಾಮರ್ಥ್ಯವಿದೆ. ನೋಡಿ, ನಾನು ಸಮುದ್ರಕ್ಕೆ
ಒಣಗಿಹೋಗು ಎಂದು ಹೇಳಿದರೆ ಹಾಗೆಯೇ
ಆಗುವದು. ಮೀನುಗಳು ನೀರಿಲ್ಲದೆ ಸತ್ತು
ನಾರುವವು.
3 ಆಕಾಶವನ್ನು ನಾನು ಕತ್ತಲೆಯ ಮಾಡುವೆನು.
ಅದನ್ನು ಕತ್ತಲೆಯಿಂದ ಮುಚ್ಚಿಬಿಡುವೆನು. ಅದು
ಶೋಕವಸ್ತ್ರದಂತೆ ಕಪ್ಪಾಗಿ ಇರುವದು.''

### ದೇವರ ಸೇವಕನು ದೇವರ ಮೇಲೆ ಅವಲಂಬಿಸಿರುವನು

4 ನನ್ನ ಒಡೆಯನಾದ ಯೆಹೋವನು ನನಗೆ ಬೋಧಿ
ಸುವ ಸಾಮರ್ಥ್ಯವನ್ನು ಅನುಗ್ರಹಿಸಿದ್ದಾನೆ. ಈಗ ನಾನು
ದುಃಖದಲ್ಲಿರುವ ಈ ಜನರಿಗೆ ಬೋಧಿಸುತ್ತಿದ್ದೇನೆ. ಪ್ರತೀ
ಮುಂಜಾನೆ ವಿದ್ಯಾರ್ಥಿಯೋ ಎಂಬಂತೆ ಆತನು ನನ್ನನ್ನು
ಎಬ್ಬಿಸಿ ನನಗೆ ಬೋಧಿಸುತ್ತಾನೆ.
5 ನನ್ನ ಒಡೆಯನಾದ
ಯೆಹೋವನು ನನಗೆ ಕಲಿಯಲು ಸಹಾಯ ಮಾಡು
ತ್ತಾನೆ. ನಾನು ಆತನಿಗೆ ವಿರುದ್ಧವಾಗಿ ದಂಗೆ ಏಳಲಿಲ್ಲ.
ಆತನನ್ನು ಹಿಂಬಾಲಿಸುವದನ್ನು ನಿಲ್ಲಿಸುವದಿಲ್ಲ.
6 ನನ್ನ
ಬೆನ್ನಿಗೆ ಹೊಡೆಯಲೂ ನನ್ನ ಗಡ್ಡವನ್ನು ಕೀಳಲೂ ಅವರಿಗೆ
ನನ್ನನ್ನು ಒಪ್ಪಿಸಿಕೊಡುತ್ತೇನೆ. ಅವರು ನನ್ನನ್ನು ಬೈದು ನನ್ನ
ಮುಖಕ್ಕೆ ಉಗುಳಿದರೂ ನಾನು ನನ್ನ ಮುಖವನ್ನು
ಅಡಗಿಸುವದಿಲ್ಲ.
7 ನನ್ನ ಒಡೆಯನಾದ ಯೆಹೋವನು
ನನಗೆ ಸಹಾಯ ಮಾಡುವನು. ಆದುದರಿಂದ ಅವರ
ಶಾಪಗಳು ನನಗೆ ಯಾವ ಹಾನಿಯನ್ನೂ ಮಾಡುವದಿಲ್ಲ.
ನಾನು ಬಲವಾಗಿರುವೆನು. ನಾನು ನಿರಾಶನಾಗುವದಿಲ್ಲ
ವೆಂದು ನನಗೆ ಗೊತ್ತಿದೆ.
8 ಯೆಹೋವನು ನನ್ನೊಂದಿಗಿದ್ದಾನೆ. ನಾನು ತಪ್ಪಿತಸ್ಥ
ನಲ್ಲವೆಂದು ಆತನು ತೋರಿಸುವನು. ಆದುದರಿಂದ
ಯಾರೂ ನನ್ನನ್ನು ಅಪರಾಧಿ ಎಂದು ಹೇಳಲಾಗುವದಿಲ್ಲ.
ಯಾರಾದರೂ ನನ್ನನು ತಪ್ಪಿತಸ್ಥನೆಂದು ದೃಢ ಪಡಿಸ
ಬೇಕೆಂದಿದ್ದರೆ ಅವರು ಮೊದಲು ನನ್ನ ಬಳಿಗೆ ಬರಲಿ,
ನಮಗೆ ವಿಚಾರಣೆಯಾಗಲಿ!
9 ಆದರೆ ನನ್ನ ಒಡೆಯನು
ಸಹಾಯ ಮಾಡುತ್ತಾನೆ. ಯಾರೂ ನನ್ನ ಮೇಲೆ ದೋಷಾ
ರೋಪಣೆ ಹೊರಿಸಲಾಗದು. ಈ ಜನರೆಲ್ಲರೂ ಬೆಲೆ
ಯಿಲ್ಲದ ಹಳೆಯ ಬಟ್ಟೆಯಂತಾಗುವರು, ನುಸಿಯು
ಅವುಗಳನ್ನು ತಿಂದುಬಿಡುವವು.
10 ಯೆಹೋವನನ್ನು ಗೌರವಿಸುವ ಜನರು ಆತನ
ಸೇವಕನ ಮಾತನ್ನು ಕೇಳುವರು. ಆ ಸೇವಕನು ಮುಂದೆ
ಸಂಭವಿಸುವುದರ ಬಗ್ಗೆ ಚಿಂತೆ ಇಲ್ಲದೆ ಸಂಪೂರ್ಣವಾಗಿ
ದೇವರ ಮೇಲೆ ನಂಬಿಕೆ ಇಡುವನು. ಅವನು ಪರಿಪೂರ್ಣ
ವಾಗಿ ಯೆಹೋವನ ಹೆಸರಿನಲ್ಲಿ ನಂಬಿಕೆ ಇಡುವನು.
ಮತ್ತು ದೇವರ ಮೇಲೆ ಅವಲಂಬಿಸಿಕೊಳ್ಳುವನು.
11 ''ಆದರೆ ನೀವು ನಿಮ್ಮ ದಾರಿಯಲ್ಲಿಯೇ ಜೀವಿಸ
ಬೇಕೆಂದಿದ್ದೀರಿ, ನೀವು ನಿಮ್ಮ ಬೆಂಕಿಗಳನ್ನೂ ದೀವಟಿಗೆ
ಗಳನ್ನೂ ಹಚ್ಚುತ್ತೀರಿ, ನಿಮಗೆ ಇಷ್ಟ ಬಂದ ರೀತಿಯಲ್ಲಿ
ಜೀವಿಸುತ್ತೀರಿ. ಆದ್ದರಿಂದ ನೀವು ಶಿಕ್ಷಿಸಲ್ಪಡುವಿರಿ. ನಿಮ್ಮ
ಬೆಂಕಿಯಲ್ಲಿಯೂ ದೀವಟಿಗೆಗಳಲ್ಲಿಯೂ ನೀವೇ ಬಿದ್ದು
ಸುಟ್ಟುಹೋಗುವಿರಿ. ಇದನ್ನು ನಾನೇ ನೆರ
ವೇರಿಸುವೆನು.''

### ಇಸ್ರೇಲ್ ಅಬ್ರಹಾಮನಂತೆ ಇರಬೇಕು

51 ''ಒಳ್ಳೆಯವರಾಗಿ ಜೀವಿಸಲು ಬಹಳವಾಗಿ
ಪ್ರಯತ್ನಿಸುತ್ತಿರುವ ಯೆಹೋವನ ಭಕ್ತರೇ,.
ನನ್ನ ಮಾತನ್ನು ಕೇಳಿರಿ. ನಿಮ್ಮ ಪಿತೃವಾದ ಅಬ್ರಹಾಮ
ನನ್ನೇ ದೃಷ್ಟಿಸಿ ನೋಡಿರಿ; ಆ ಬಂಡೆಯೊಳಗಿಂದಲೇ ನೀವು
ತೆಗೆಯಲ್ಪಟ್ಟಿದ್ದೀರಿ.
2 ನಿಮ್ಮ ಪಿತೃವಾದ ಅಬ್ರಹಾಮನನ್ನೂ

ನಿಮ್ಮ ಮಾತೆಯಾದ ಸಾರಳನ್ನೂ ದೃಷ್ಟಿಸಿರಿ; ನಾನು ಕರೆದಾಗ ಅಬ್ರಹಾಮನು ಒಬ್ಬಂಟಿಗನಾಗಿದ್ದನು. ನಾನು ಅವನನ್ನು ಆಶೀರ್ವದಿಸಿ, ಅವನ ಸಂತಾನವನ್ನು ಅಭಿವೃದ್ಧಿಪಡಿಸಿ, ಅವನನ್ನು ಮಹಾ ಜನಾಂಗದ ಮೂಲ ಪುರುಷನನ್ನಾಗಿ ಮಾಡಿದೆನು.''

3 ಆದೇ ರೀತಿಯಲ್ಲಿ ಯೆಹೋವನು ಚೀಯೋನನ್ನು ಮತ್ತು ನಿರ್ಜನವಾದ ಅದರ ಸ್ಥಳಗಳನ್ನು ಆದರಿಸುವನು; ಅವರಿಗಾಗಿ ಮಹಾದೊಡ್ಡ ಕಾರ್ಯವನ್ನು ಮಾಡುವನು. ಯೆಹೋವನು ಮರುಭೂಮಿಯನ್ನು ಬದಲಾಯಿಸುವನು. ಆ ಮರುಭೂಮಿಯು ಏದೆನ್ ಉದ್ಯಾನವನದಂತೆ ಆಗುವದು. ಆ ದೇಶವು ಬರಿದಾಗಿತ್ತು. ಆದರೆ ಅದು ಯೆಹೋವನ ಉದ್ಯಾನವನವಾಗುವದು. ಅದರೊಳಗಿರುವ ಜನರು ಸಂತೋಷಭರಿತರಾಗುವರು. ಅವರು ತಮ್ಮ ಸಂತೋಷವನ್ನು ವ್ಯಕ್ತಪಡಿಸುವರು. ಅವರು ಕೃತಜ್ಞತಾಸ್ತುತಿ ಮಾಡುವರು, ಜಯಗೀತೆಯನ್ನು ಹಾಡುವರು.

4 ''ನನ್ನ ಜನರೇ, ನನ್ನ ಮಾತನ್ನು ಕೇಳಿರಿ. ನನ್ನ ಕಟ್ಟಳೆ ಮತ್ತು ನ್ಯಾಯ ಬೆಳಕಿನಂತಿದ್ದು ಹೇಗೆ ಜೀವಿಸಬೇಕೆಂಬುದನ್ನು ಜನರಿಗೆ ತೋರಿಸುತ್ತವೆ.
5 ನಾನು ನ್ಯಾಯವಂತನೆಂದು ನಿಮಗೆ ಬೇಗನೆ ತೋರಿಸುವೆನು. ನಿಮ್ಮನ್ನು ಬೇಗನೆ ರಕ್ಷಿಸುವೆನು. ನಾನು ನನ್ನ ಸಾಮರ್ಥ್ಯದಿಂದ ಎಲ್ಲಾ ಜನಾಂಗಗಳಿಗೆ ನ್ಯಾಯತೀರಿಸುವೆನು. ದೂರದೇಶದವರು ನನಗೋಸ್ಕರ ಕಾಯುತ್ತಿದ್ದಾರೆ. ಅವರು ತಮ್ಮ ರಕ್ಷಣೆಗಾಗಿ ನನ್ನ ಶಕ್ತಿಯನ್ನು ಎದುರು ನೋಡುತ್ತಿದ್ದಾರೆ.
6 ಪರಲೋಕದ ಕಡೆಗೆ ದೃಷ್ಟಿಸು. ನಿನ್ನ ಸುತ್ತಲೂ ಇರುವ ಭೂಮಿಯನ್ನು ನೋಡು. ಹೊಗೆಯ ಮೋಡದಂತೆ ಆಕಾಶವು ಇಲ್ಲದೆ ಹೋಗುವದು. ಭೂಮಿಯು ಬೆಲೆಯಿಲ್ಲದ ಹಳೆಯ ಬಟ್ಟೆಯಂತಾಗುವುದು. ಭೂಮಿಯ ಮೇಲಿರುವ ಜನರು ಸಾಯುವರು. ಆದರೆ ನನ್ನ ರಕ್ಷಣೆಯು ನಿರಂತರವಾಗಿರುವದು. ನನ್ನ ಕರುಣೆಯು ಅಂತ್ಯವಾಗದು.
7 ಒಳ್ಳೆಯತನವನ್ನು ಅರ್ಥಮಾಡಿಕೊಂಡ ನೀವು ನನ್ನ ಮಾತುಗಳನ್ನು ಕೇಳಿರಿ. ನನ್ನ ಬೋಧನೆಯನ್ನು ಅನುಸರಿಸುವ ನೀವು ನನ್ನ ಮಾತಿಗೆ ಕಿವಿಗೊಡಿರಿ. ದುಷ್ಟಜನರಿಗೆ ಭಯಪಡಬೇಡಿರಿ. ಅವರು ನಿಮಗೆ ಹೇಳುವ ಕೆಟ್ಟಮಾತುಗಳಿಗೆ ಭಯಪಡಬೇಡಿ.
8 ಯಾಕೆಂದರೆ ನುಸಿಯು ಅವರನ್ನು ಬಟ್ಟೆಯಂತೆ ತಿಂದು ಹಾಕುವುದು. ಅವರು ಉಣ್ಣೆಯಂತಿರುವರು, ನುಸಿಯು ಅದನ್ನು ತಿಂದುಬಿಡುವುದು. ಆದರೆ ನನ್ನ ಒಳ್ಳೆಯತನವು ಶಾಶ್ವತವಾದದ್ದು. ನನ್ನ ರಕ್ಷಣೆಯು ಸದಾಕಾಲವಿರುವುದು.''

## ದೇವರ ಶಕ್ತಿಯೇ ಜನರನ್ನು ರಕ್ಷಿಸುವದು

9 ಯೆಹೋವನ ಭುಜಬಲವೇ, ಎಚ್ಚರಗೊಳ್ಳು; ಬಲಗೊಳ್ಳು, ಹಿಂದೆ ಮಾಡಿದಂತೆಯೇ ನಿನ್ನ ಶಕ್ತಿಯನ್ನು ತೋರು. ನಿನ್ನ ಶಕ್ತಿಯಿಂದ ನೀನು ರಹಬನನ್ನು ಸೋಲಿಸಿರುವೆ. ದೈತ್ಯಾಕಾರದ ಮೃಗವನ್ನು ಸೋಲಿಸಿರುವೆ.
10 ನೀನು ಸಮುದ್ರವನ್ನು ಬತ್ತಿಸಿರುವೆ. ಮಹಾ ಆಳದ ಗುಂಡಿಗಳ ನೀರನ್ನು ನೀನು ಬತ್ತಿಸಿರುವೆ. ಅತ್ಯಂತ ಆಳವಾದ ಸಮುದ್ರದ ತಳವನ್ನು ನೀನು ರಸ್ತೆಯನ್ನಾಗಿ ಮಾಡಿರುವೆ. ನಿನ್ನ ಜನರು ಆ ರಸ್ತೆಯಲ್ಲಿ ಸಮುದ್ರವನ್ನು ದಾಟಿ ರಕ್ಷಿಸಲ್ಪಟ್ಟರು.
11 ಯೆಹೋವನು ತನ್ನ ಜನರನ್ನು ರಕ್ಷಿಸುತ್ತಾನೆ. ಅವರು ಚೀಯೋನಿಗೆ ಸಂತೋಷದಿಂದ ಮರಳಿ ಬರುತ್ತಾರೆ. ಅವರು ಬಹಳ ಸಂತೋಷಪಡುವರು. ಅವರ ಹರ್ಷವು ಅವರ ತಲೆಯ ಮೇಲೆ ಕಿರೀಟದಂತೆ ನಿತ್ಯಕಾಲಕ್ಕೂ ಇರುವುದು. ಅವರು ಹರ್ಷದಿಂದ ಹಾಡುವರು. ಅವರ ದುಃಖವೆಲ್ಲಾ ಬಹು ದೂರವಾಗುವುದು.
12 ಯೆಹೋವನು ಹೇಳುವದೇನೆಂದರೆ, ''ನಿನ್ನನ್ನು ಸಂತೈಸುವಾತನು ನಾನೇ. ಆದುದರಿಂದ ನೀನು ಜನರಿಗೆ ಯಾಕೆ ಹೆದರಬೇಕು. ಅವರು ಹುಟ್ಟಿ ಸಾಯುವ ನರರಾಗಿದ್ದಾರೆ. ಅವರು ಹುಲ್ಲಿನಂತೆ ಸಾಯುವ ಕೇವಲ ಮಾನವರಾಗಿದ್ದಾರೆ.''

13 ಯೆಹೋವನು ನಿನ್ನನ್ನು ಸೃಷ್ಟಿಸಿದ್ದಾನೆ. ತನ್ನ ಶಕ್ತಿಯಿಂದ ಭೂಮಿಯನ್ನು ಸೃಷ್ಟಿಸಿದವನು ಆತನೇ. ಆತನು ತನ್ನ ಶಕ್ತಿಯಿಂದ ಭೂಮಿಯ ಮೇಲೆ ಆಕಾಶವನ್ನು ಹರಡಿದ್ದಾನೆ. ಆದರೆ ನೀನು ಆತನನ್ನೂ ಆತನ ಶಕ್ತಿಯನ್ನೂ ಮರೆತುಬಿಟ್ಟೆ. ಆದುದರಿಂದಲೇ ನಿನಗೆ ಕೇಡು ಮಾಡುವ ದುಷ್ಟರಿಗೆ ನೀನು ಯಾವಾಗಲೂ ಹೆದರಿಕೊಂಡಿರುವೆ. ಅವರು ನಿನ್ನನ್ನು ನಾಶಮಾಡಲು ಆಲೋಚಿಸಿದ್ದಾರೆ. ಈಗ ಅವರೆಲ್ಲಿದ್ದಾರೆ? ಅವರೆಲ್ಲಾ ಹೋಗಿಬಿಟ್ಟಿದ್ದಾರೆ.
14 ಸೆರೆಯಲ್ಲಿರುವವರು ಬೇಗನೆ ಬಿಡುಗಡೆ ಹೊಂದುವರು. ಅವರು ಸೆರೆಮನೆಯಲ್ಲಿ ಸತ್ತು ಕೊಳೆಯುವುದಿಲ್ಲ. ಅವರಿಗೆ ತಿನ್ನಲು ಬೇಕಾದಷ್ಟು ಊಟವಿರುವದು.
15 ''ಯೆಹೋವನೆಂಬ ನಾನೇ ನಿಮ್ಮ ದೇವರು. ನಾನು ಸಾಗರವನ್ನು ಕದಡಿಸಿ ತೆರೆಯನ್ನುಂಟು ಮಾಡುತ್ತೇನೆ.'' (ಸರ್ವಶಕ್ತನು ಎಂಬುದೇ ನನ್ನ ನಾಮಧೇಯ.)

16“ನನ್ನ ಸೇವಕನೇ, ನೀನು ಹೇಳತಕ್ಕ ಇಷ್ಟವಾದ ಮಾತುಗಳನ್ನು ನಿನ್ನ ಬಾಯಲ್ಲಿಡುತ್ತೇನೆ. ನಾನು ನನ್ನ ಕೈಗಳಿಂದ ನಿನ್ನನ್ನು ಮುಚ್ಚಿ ಕಾಪಾಡುವೆನು. ಹೊಸ ಭೂಮ್ಯಾಕಾಶಗಳನ್ನು ನಿರ್ಮಿಸಲು ನಾನು ನಿನ್ನನ್ನು ಉಪಯೋಗಿಸುತ್ತೇನೆ. ಇಸ್ರೇಲರಿಗೆ, ‘ನೀವು ನನ್ನ ಜನರು’ ಎಂದು ಹೇಳುವದಕ್ಕೆ ನಿನ್ನನ್ನು ಉಪ ಯೋಗಿಸುತ್ತೇನೆ.”

## ದೇವರು ಇಸ್ರೇಲರನ್ನು ಶಿಕ್ಷಿಸಿದನು

17 ಜೆರುಸಲೇಮೇ, ಎಚ್ಚರಗೊಳ್ಳು; ಜೆರುಸಲೇಮೇ,
ಎದ್ದೇಳು; ಯೆಹೋವನು ನಿನ್ನ ಮೇಲೆ ಬಹಳವಾಗಿ
ಕೋಪಗೊಂಡು ನಿನ್ನನ್ನು ಶಿಕ್ಷಿಸಿದ್ದಾನೆ. ಆ ಶಿಕ್ಷೆಯು
ಒಂದು ವಿಷದ ಪಾತ್ರೆಯಂತಿದೆ. ನೀನು ಅದನ್ನು
ಕುಡಿಯಲೇ ಬೇಕಿತ್ತು. ಈಗ ನೀನು ಅದನ್ನು
ಕುಡಿದಿರುವೆ.

18ಜೆರುಸಲೇಮಿನಲ್ಲಿ ಅನೇಕ ಜನರಿದ್ದರೂ ಅವರಲ್ಲಿ
ಯಾರೂ ಅವಳಿಗಾಗಿ ನಾಯಕರಾಗಲಿಲ್ಲ. ಆಕೆಯು
ಅನೇಕ ಮಕ್ಕಳನ್ನು ಪಡೆದವಳಾಗಿದ್ದರೂ ಆಕೆಯನ್ನು
ನಡಿಸಲು ಮಾರ್ಗದರ್ಶಕರು ಯಾರೂ ಆಗಲಿಲ್ಲ.
19ಜೆರುಸಲೇಮಿಗೆ ತೊಂದರೆಗಳು ಎರಡು ಗುಂಪುಗ ಳಾಗಿ
ಬಂದವು: ಲೂಟಿ ಮತ್ತು ಕೊರತೆ: ಕ್ಷಾಮ ಮತ್ತು ಖಡ್ಗ.
ನೀನು ಸಂಕಟ ಅನುಭವಿಸುವಾಗ ಯಾರೂ ನಿನಗೆ
ಸಹಾಯ ಮಾಡಲಿಲ್ಲ. ಯಾರೂ ನಿನಗೆ ಕರುಣೆ ತೋರಿಸ
ಲಿಲ್ಲ. 20ನಿನ್ನ ಜನರು ಬಲಹೀನರಾದರು. ಅವರು ನೆಲದ
ಮೇಲೆ ಬಿದ್ದು ಅಲ್ಲಿಯೇ ಮಲಗಿದರು. ಆ ಜನರು ರಸ್ತೆಯ
ಮೂಲೆಮೂಲೆಗಳಲ್ಲಿ ಬಿದ್ದುಕೊಂಡಿರುತ್ತಾರೆ. ಅವರು
ಬಲೆಯೊಳಗೆ ಸಿಕ್ಕಿಬಿದ್ದ ಪ್ರಾಣಿಯಂತಿರುವರು.
ಯೆಹೋವನ ಕೋಪದಿಂದ ಇನ್ನೂ ಹೆಚ್ಚಿನ ಶಿಕ್ಷೆಯನ್ನು,
ತಾಳಲಾರದಷ್ಟು ಶಿಕ್ಷೆಯನ್ನು ಅನುಭವಿಸಿದರು. ದೇವರು
ಇನ್ನೂ ಹೆಚ್ಚಾಗಿ ಶಿಕ್ಷೆಕೊಡುವುದಾಗಿ ಹೇಳಿದಾಗ ಅವರು
ಕಂಗಾಲಾದರು.

21ಜೆರುಸಲೇಮೇ, ನನಗೆ ಕಿವಿಗೊಡು. ನೀನು ಅಮಲೇ
ರಿದವನಂತೆ ಶಕ್ತಿಹೀನನಾಗಿರುವೆ. ನೀನು ಕುಡಿದು
ಅಮಲೇರುವುದು ದ್ರಾಕ್ಷಾರಸದಿಂದಲ್ಲ, ವಿಷದಿಂದಷ್ಟೇ.

22ನಿನ್ನ ದೇವರೂ ಒಡೆಯನೂ ಆಗಿರುವ
ಯೆಹೋವನು ತನ್ನ ಜನರಿಗಾಗಿ ಯುದ್ಧ ಮಾಡುವನು.
ಅವನು ನಿನಗೆ ಹೇಳುವದೇನೆಂದರೆ, “ಇಗೋ, ನಾನು
ನಿನ್ನಿಂದ ವಿಷದ ಪಾತ್ರೆಯನ್ನು (ಶಿಕ್ಷೆ) ತೆಗೆದುಬಿಡುತ್ತೇನೆ.
ಇನ್ನು ಮುಂದೆ ನನ್ನ ಸಿಟ್ಟಿನಿಂದ ನೀನು ಶಿಕ್ಷಿಸಲ್ಪಡುವದಿಲ್ಲ.
23ಈಗ ನನ್ನ ಕೋಪದ ದೆಸೆಯಿಂದ ನಿನಗೆ ಹಾನಿ
ಮಾಡಿದವರನ್ನು ಶಿಕ್ಷಿಸುವೆನು. ಅವರು ನಿನ್ನನ್ನು ಕೊಲ್ಲಲು
ಪ್ರಯತ್ನಿಸಿದರು. ‘ನಮ್ಮ ಮುಂದೆ ಸಾಷ್ಟಾಂಗ ಬೀಳಿರಿ.
ಆಗ ನಿಮ್ಮ ಮೇಲೆ ನಾವು ನಡೆಯುವೆವು’ ಎಂದು
ಹೇಳಿದರು. ಅವರಿಗೆ ಅಡ್ಡಬೀಳಲು ನಿಮ್ಮನ್ನು ಬಲಾತ್ಕರಿ
ಸಿದರು. ಆ ಬಳಿಕ ಅವರು ನೀವು ಮಣ್ಣಿನ ಧೂಳೋ
ಎಂಬಂತೆ ನಿಮ್ಮ ಬೆನ್ನುಗಳ ಮೇಲೆ ನಡೆದಾಡಿದರು. ನೀವು
ಅವರಿಗೆ ನಡೆಯಲು ಬೀದಿಯಾದಿರಿ.”

## ಇಸ್ರೇಲ್ ರಕ್ಷಿಸಲ್ಪಡುವದು

52 ಚೀಯೋನೇ, ಎಚ್ಚರಗೊಳ್ಳು, ನಿನ್ನ
ಉಡುಪನ್ನು ಹಾಕಿಕೋ; ನಿನ್ನ ಪ್ರತಾಪವನ್ನು
ಧರಿಸಿಕೋ. ಪರಿಶುದ್ಧ ಜೆರುಸಲೇಮೇ, ಎದ್ದು
ನಿಲ್ಲು. ಸುನ್ನತಿಯಿಲ್ಲದವರೂ ಅಶುದ್ಧರೂ ನಿನ್ನ
ಲ್ಲಿಗೆ ಮತ್ತೇ ಪ್ರವೇಶಿಸರು.
2 ನಿನ್ನ ಧೂಳನ್ನು ಝಾಡಿಸು. ನಿನ್ನ ಮನೋಹರ
ವಾದ ವಸ್ತ್ರಗಳನ್ನು ಧರಿಸಿಕೋ. ಚೀಯೋನಿನ
ಕುಮಾರ್ತೆಯಾದ ಜೆರುಸಲೇಮೇ, ನೀನು ಒಮ್ಮೆ
ಸೆರೆಯಾಳಾಗಿದ್ದೆ. ಈಗ ನೀನು ಕುತ್ತಿಗೆಗೆ ಬಂಧಿಸ
ಲ್ಪಟ್ಟ ಸಂಕೋಲೆಗಳಿಂದ ಬಿಡಿಸಿಕೋ.
3 ಯೆಹೋವನು ಹೇಳುವದೇನೆಂದರೆ: “ನಾನು
ನಿನ್ನನ್ನು ಮಾರಿದ್ದು ಹಣಕ್ಕಾಗಿಯಲ್ಲ; ಆದುದ
ರಿಂದ ನಾನು ನಿನ್ನನ್ನು ಹಣಕೊಡದೆ ಬಿಡುಗಡೆ
ಮಾಡುವೆನು.”

4ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ: “ನನ್ನ ಜನರು ಮೊದಲು ಈಜಿಪ್ಟಿನಲ್ಲಿ ನೆಲೆಸಲು
ಹೋದರು. ನಂತರ ಅವರು ದಾಸರಾದರು. ಆ ಬಳಿಕ
ಅಶ್ಶೂರವು ಅವರನ್ನು ಗುಲಾಮರನ್ನಾಗಿ ಮಾಡಿತು. 5ಈಗ
ನೋಡು, ಸಂಭವಿಸಿದ್ದನ್ನು ಗಮನಿಸು. ಇನ್ನೊಂದು
ಜನಾಂಗವು ಅವರನ್ನು ಗುಲಾಮರನ್ನಾಗಿ ಮಾಡಿತು. ಈ
ದೇಶವು ನನ್ನ ಜನರನ್ನು ತೆಗೆದುಕೊಂಡು ಹೋಗಲು ಹಣ
ಕೊಡಲಿಲ್ಲ. ಈ ದೇಶವು ನನ್ನ ಜನರ ಮೇಲೆ ದಬ್ಬಾಳಿಕೆ
ನಡಿಸಿ ನಕ್ಕಿತ್ತು. ಈಗ ಜನರು ನನ್ನನ್ನೂ ನನ್ನ ಹೆಸರನ್ನೂ
ಯಾವಾಗಲೂ ಗೇಲಿ ಮಾಡುತ್ತಾರೆ.”

6ಯೆಹೋವನು ಹೇಳುವದೇನೆಂದರೆ, “ಜನರು
ನನ್ನನ್ನು ತಿಳಿದುಕೊಳ್ಳಲೆಂದು ಹೀಗಾಯಿತು. ನಾನು
ಯಾರೆಂದು ನನ್ನ ಜನರಿಗೆ ಗೊತ್ತಾಗುವದು. ನನ್ನ ಜನರಿಗೆ
ನನ್ನ ಹೆಸರಿನ ಪರಿಚಯವಾಗುವದು. “ನಾನೇ” ಎಂಬಾತ
ನಾದ ನಾನೇ ಅವರ ಸಂಗಡ ಮಾತನಾಡುತ್ತಿದ್ದೇನೆ ಎಂದು
ಅವರಿಗೆ ಗೊತ್ತಾಗುವದು.”

7ಒಬ್ಬ ಸಂದೇಶವಾಹಕನು ಬೆಟ್ಟದ ಮೇಲಿನಿಂದ
ಒಳ್ಳೆಯ ಸಮಾಚಾರವನ್ನು ತರುವದು ಎಷ್ಟೋ ಅಂದ
ವಾಗಿದೆ. ಸಂದೇಶಕಾರನು, “ನಮಗೆ ಸಮಾಧಾನವಿದೆ,

ನಾವು ರಕ್ಷಿಸಲ್ಪಟ್ಟಿದ್ದೇವೆ. ಚೀಯೋನೇ, ನಿನ್ನ ದೇವರು ಅರಸನಾಗಿದ್ದಾನೆ!''ಎಂಬ ಸಂದೇಶವನ್ನು ಕೇಳುವದು ಎಷ್ಟೋ ಸಂತೋಷಕೊಡುವದಾಗಿದೆ.

8 ಪಟ್ಟಣವನ್ನು ಕಾಯುವವರು ಸಂತೋಷದಿಂದ ಹರ್ಷಧ್ವನಿ ಮಾಡುತ್ತಾರೆ. ಒಟ್ಟಾಗಿ ಸಂತಸ ಪಡುತ್ತಿದ್ದಾರೆ. ಯಾಕೆಂದರೆ ಯೆಹೋವನು ಚೀಯೋನಿಗೆ ಹಿಂದಿರುಗುವದನ್ನು ಪ್ರತಿಯೊಬ್ಬನು ನೋಡುವನು.

9 ಜೆರುಸಲೇಮೇ, ನಿನ್ನ ಕೆಡವಲ್ಪಟ್ಟ ಕಟ್ಟಡಗಳು ಮತ್ತೆ ಸಂತೋಷಿಸುವವು. ನೀವೆಲ್ಲರೂ ಒಟ್ಟಾಗಿ ಹರ್ಷಿಸುವಿರಿ. ಯಾಕೆಂದರೆ ಯೆಹೋವನು ಜೆರುಸಲೇಮನ್ನು ಸಂತೈಸುವನು. ಆತನು ಜೆರುಸಲೇಮನ್ನು ಬಿಡಿಸುವನು!

10 ಯೆಹೋವನು ತನ್ನ ಪರಿಶುದ್ಧ ಸಾಮರ್ಥ್ಯವನ್ನು ಎಲ್ಲಾ ಜನಾಂಗಗಳಿಗೆ ಪ್ರದರ್ಶಿಸುವನು. ಯೆಹೋವನು ತನ್ನ ಜನರನ್ನು ರಕ್ಷಿಸುವದನ್ನು ದೂರದೇಶದವರು ನೋಡುವರು.

11 ನೀವು ಬಾಬಿಲೋನಿನಿಂದ ಹೊರಟು ಹೋಗಬೇಕು; ನೀವು ಸ್ಥಳವನ್ನು ಬಿಟ್ಟುಹೋಗಬೇಕು. ಯಾಜಕರೇ, ಆರಾಧನೆಗೆ ಬೇಕಾದ ಸಾಮಗ್ರಿಗಳನ್ನು ಹೊತ್ತುಕೊಳ್ಳಿರಿ. ನಿಮ್ಮನ್ನು ಶುದ್ಧಿ ಮಾಡಿಕೊಳ್ಳಿರಿ; ಅಶುದ್ಧವಾದ ಯಾವುದನ್ನೂ ಮುಟ್ಟದಿರಿ.

12 ನೀವು ಬಾಬಿಲೋನಿನಿಂದ ಹೊರಗೆ ಬರುವಿರಿ. ತ್ವರೆಪಟ್ಟು ಬರುವಂತೆ ಅವರು ಬಲವಂತ ಮಾಡುವದಿಲ್ಲ. ನೀವು ಓಡಿಹೋಗುವಂತೆ ಅವರು ಒತ್ತಾಯಪಡಿಸುವದಿಲ್ಲ. ನೀವು ಹೊರಗೆ ನಡೆಯುವಿರಿ. ಯೆಹೋವನು ನಿಮ್ಮೊಂದಿಗೆ ನಡಿಯುವನು. ಯೆಹೋವನು ನಿಮ್ಮ ಮುಂದೆ ಇರುವನು. ಇಸ್ರೇಲರ ದೇವರು ನಿಮ್ಮ ಹಿಂದೆಯೂ ಇರುವನು.

### ದೇವಸೇವಕನ ಸಂಕಟ

13''ನನ್ನ ಸೇವಕನನ್ನು ದೃಷ್ಟಿಸಿರಿ. ಆತನು ಯಶಸ್ವಿಯಾಗುವನು. ಅವನು ಬಹಳ ಮುಖ್ಯವಾದವನಾಗಿರುವನು. ಮುಂದಿನ ದಿವಸಗಳಲ್ಲಿ ಜನರು ಆತನನ್ನು ಸನ್ಮಾನಿಸಿ ಗೌರವಿಸುವರು.''

14''ಆದರೆ ನನ್ನ ಜನರು ನನ್ನ ಸೇವಕನನ್ನು ನೋಡಿದಾಗ ಆಶ್ಚರ್ಯಗೊಂಡರು. ಆತನು ಮನುಷ್ಯನೆಂಬ ಗುರತೇ ಅವರಿಗೆ ಸಿಕ್ಕಲಿಲ್ಲ. ಆತನ ರೂಪವು ವಿಕಾರವಾಗುವಷ್ಟರ
ಮಟ್ಟಿಗೆ ಆತನು ಗಾಯಗೊಂಡಿದ್ದನು. 15ಜನರೆಲ್ಲರೂ
ಆಶ್ಚರ್ಯಪಡುವರು. ಅರಸರು ದಿಗ್ಭ್ರಮೆಯಿಂದ ಆತನನ್ನು ದೃಷ್ಟಿಸಿ ನೋಡುವರು. ಅವರು ನನ್ನ ಸೇವಕನ ಬಗ್ಗೆ ಕೇಳಲಿಲ್ಲ. ಆತನಿಗೆ ಸಂಭವಿಸಿದ್ದನ್ನೇ ನೋಡಿದರು. ಅವರು ಆತನ ವಿಚಾರ ಕೇಳದಿದ್ದರೂ ಅವರಿಗೆ ತಿಳಿದು ಬಂತು.

53 ನಾವು ಹೇಳಿದ ಸಂಗತಿಗಳನ್ನು ಯಾರು ನಂಬಿದರು? ಯೆಹೋವನ ದಂಡನೆಯನ್ನು ನಿಜವಾಗಿಯೂ ಸ್ವೀಕರಿಸಿಕೊಂಡವರು ಯಾರು?

2ಒಂದು ಸಣ್ಣ ಸಸಿಯು ಬೆಳೆಯುವ ರೀತಿಯಲ್ಲಿ
ಯೆಹೋವನ ಮುಂದೆ ಆತನು ಬೆಳೆದನು. ಆತನು ಒಣ ನೆಲದಿಂದ ಚಿಗುರುವ ಬೇರಿನಂತಿದ್ದನು. ಆತನು ಒಬ್ಬ ವಿಶೇಷ ಪುರುಷನಂತೆ ತೋರಲಿಲ್ಲ. ಅಂಥ ಲಕ್ಷಣಗಳೇನೂ ಆತನಲ್ಲಿರಲಿಲ್ಲ. ನಾವು ಆತನನ್ನು ನೋಡಿದಾಗ ಆತನಲ್ಲಿ ನೋಡತಕ್ಕ ಯಾವ ಲಕ್ಷಣವೂ ಕಾಣಲಿಲ್ಲ.
3ಜನರು ಆತನಿಗೆ ಪರಿಹಾಸ್ಯ ಮಾಡಿದರು. ಆತನ ಸ್ನೇಹಿತರು ಆತನನ್ನು ತೊರೆದರು. ಆತನು ನೋವಿನಿಂದ ಬಳಲಿದನು. ಆತನು ಕಾಯಿಲೆಯಿಂದ ಬಾಧಿತನಾಗಿದ್ದನು. ಜನರು ಆತನ ಕಡೆಗೆ ನೋಡಲೂ ಇಲ್ಲ. ನಾವು ಆತನನ್ನು ಗಮನಕ್ಕೆ ತರಲೇ ಇಲ್ಲ.
4ಆದರೆ ಆತನು ನಮ್ಮ ಸಂಕಷ್ಟಗಳನ್ನು ತನ್ನ ಮೇಲೆ
ಹೊತ್ತುಕೊಂಡನು. ನಮ್ಮ ಬೇನೆಯನ್ನು ಆತನು ಅನುಭವಿಸಿದನು. ದೇವರು ಆತನನ್ನು ಶಿಕ್ಷಿಸಿದ್ದಾನೆ ಎಂದು ನಾವು ನೆನಸಿದೆವು. ಆತನು ಏನೋ ಮಾಡಿದ್ದಕ್ಕಾಗಿ ದೇವರು ಆತನಿಗೆ ಹೊಡೆದನೆಂದು ಭಾವಿಸಿಕೊಂಡೆವು.
5ಆದರೆ ನಾವು ಮಾಡಿದ ದುಷ್ಟತನಕ್ಕಾಗಿಯೇ ಆತನು
ಬಾಧಿತನಾದನು. ನಮ್ಮ ಅಪರಾಧಗಳಿಗಾಗಿಯೇ ಆತನು ಜಜ್ಜಲ್ಪಟ್ಟನು. ನಾವು ಹೊಂದಬೇಕಾಗಿದ್ದ ಶಿಕ್ಷೆಯನ್ನು ಆತನೇ ಅನುಭವಿಸಿದನು. ಆತನ ಬಾಸುಂಡೆಗಳಿಂದ
ನಮಗೆ ಗುಣವಾಯಿತು. 6ಹೀಗೆ ಆತನು ಮಾಡಿದ್ದಾಗಲೂ
ನಾವು ಕುರಿಗಳಂತೆ ದಾರಿತಪ್ಪಿ ತೊಳಲಾಡಿದೆವು. ನಮ್ಮ ಸ್ವಂತ ದಾರಿಯಲ್ಲಿ ನಾವು ಹೋದೆವು. ನಮ್ಮ ಅಪರಾಧಗಳಿಂದ ನಾವು ವಿಮುಕ್ತರಾಗುವಂತೆ ಯೆಹೋವನು ನಮ್ಮ ಅಪರಾಧಗಳನ್ನು ಆತನ ಮೇಲೆ ಹಾಕಿದನು.
7ಆತನು ಬಾಧೆಯನ್ನೂ ಹಿಂಸೆಯನ್ನೂ ಅನುಭವಿಸಿ
ದನು. ಆದರೂ ಆತನು ಪ್ರತಿಭಟಿಸಲಿಲ್ಲ. ಕೊಯ್ಯಲು ಕೊಂಡೊಯ್ಯುವ ಕುರಿಮರಿಯಂತೆಯೂ ಉಣ್ಣೆಯನ್ನು ಕತ್ತರಿಸುವಾಗ ಮೌನವಾಗಿರುವ ಕುರಿಮರಿಯಂತೆಯೂ
ಆತನು ಮೌನವಾಗಿದ್ದನು. 8ಜನರು ಬಲವಂತದಿಂದ ಆತ
ನನ್ನು ಕೊಂಡೊಯ್ದರು; ಆತನಿಗೆ ಅನ್ಯಾಯವಾದ ತೀರ್ಪನ್ನು ನೀಡಿದರು; ಆತನನ್ನು ಜೀವಲೋಕದಿಂದಲೇ ತೆಗೆದುಹಾಕಿ ಆತನಿಗೆ ಸಂತಾನವೇ ಇಲ್ಲದಂತೆ

ಮಾಡಿದರು. ನನ್ನ ಜನರ ಪಾಪಗಳಿಗಾಗಿ ಆತನು ದಂಡಿಸಲ್ಪಟ್ಟನು.

9ಆತನು ಸತ್ತ ಬಳಿಕ ಧನಿಕರೊಂದಿಗೂ ದುಷ್ಟರೊಂದಿಗೂ ಹೂಳಲ್ಪಟ್ಟನು. ಆತನು ಯಾವ ಅಪರಾಧವನ್ನೂ ಮಾಡಲಿಲ್ಲ; ಸುಳ್ಳಾಡಲಿಲ್ಲ. ಆದರೂ ಇವೆಲ್ಲವೂ ಆತನಿಗೆ ಸಂಭವಿಸಿದವು.

10ಆತನನ್ನು ಬಾಧೆಯಿಂದ ಜಜ್ಜಬೇಕೆಂಬುದು ಯೆಹೋವನ ನಿರ್ಧಾರವಾಗಿತ್ತು. ಆದುದರಿಂದ ಈ ಸೇವಕನು ತನ್ನನ್ನು ಮರಣಕ್ಕೆ ಒಪ್ಪಿಸಿಕೊಟ್ಟನು. ಆದರೆ ಆತನು ತನ್ನ ಹೊಸ ಜೀವಿತದಲ್ಲಿ ಚಿರಂಜೀವಿಯಾಗುವನು. ಆತನು ತನ್ನ ಜನರನ್ನು ದೃಷ್ಟಿಸಿನೋಡುವನು. ಯೆಹೋವನ ಸಂಕಲ್ಪದ ಮೇರೆಗೆ ಎಲ್ಲವನ್ನೂ ಆತನು ಮಾಡುವನು.

11ಆತನು ತನ್ನ ಆತ್ಮದಲ್ಲಿ ಬಹಳವಾಗಿ ಸಂಕಟ ಪಡುವನು. ಆದರೆ ಒಳ್ಳೆಯ ಕಾರ್ಯಗಳಾಗುವುದನ್ನು ಆತನು ನೋಡುವನು. ತಾನು ಕಲಿತ ವಿಷಯಗಳಲ್ಲಿ ಸಂತುಷ್ಟನಾಗುವನು. ಅನೇಕರು ತಮ್ಮ ಪಾಪಗಳಿಂದ ಬಿಡುಗಡೆ ಹೊಂದುವಂತೆ ನನ್ನ ಒಳ್ಳೇ ಸೇವಕನು ಮಾಡುವನು. ಅವರ ಪಾಪಗಳನ್ನು ಹೊತ್ತುಕೊಂಡು ಹೋಗುವನು.
12ಈ ಕಾರಣಕ್ಕಾಗಿ ನಾನು ಆತನನ್ನು ಜನರ ಮಧ್ಯದಲ್ಲಿ ಪ್ರಸಿದ್ಧಿಪಡಿಸುವೆನು. ಬಲಿಷ್ಠರೊಂದಿಗೆ ಸಮಪಾಲನ್ನು ಹೊಂದುವನು. ಆತನು ಜನರಿಗಾಗಿ ತನ್ನ ಪ್ರಾಣವನ್ನು ಕೊಟ್ಟು ಸತ್ತದಕ್ಕಾಗಿ ನಾನು ಆತನಿಗೆ ಹೀಗೆ ಮಾಡುವೆನು.

ಜನರು ಆತನನ್ನು ಅಪರಾಧಿ ಎಂದು ಹೇಳಿದರೂ ವಾಸ್ತವವಾಗಿ ಆತನು ಬಹು ಜನರ ಪಾಪಗಳನ್ನು ಹೊತ್ತುಕೊಂಡು ಹೋದನು. ಈಗ ಆತನು ಪಾಪಮಾಡಿದ ಜನರಿಗಾಗಿ ಪ್ರಾರ್ಥನಾಪೂರ್ವಕವಾಗಿ ವಿಜ್ಞಾಪಿಸುವನು.

### ದೇವರು ತನ್ನ ಜನರನ್ನು ಸ್ವದೇಶಕ್ಕೆ ಬರಮಾಡುವನು

54 ಬಂಜೆಯೇ, ಸಂತೋಷಿಸು, ನಿನಗೆ ಮಕ್ಕಳಿಲ್ಲ. ಆದುದರಿಂದ ನೀನು ಬಹಳವಾಗಿ ಸಂತೋಷಿಸು.

ಯೆಹೋವನು ಹೇಳುವದೇನಂದರೆ,
‘‘ಏಕಾಂಗಿಯಾಗಿರುವ ಹೆಂಗಸಿಗೆ ಮದುವೆಯಾದ
ಹೆಂಗಸಿಗಿಂತ ಹೆಚ್ಚು ಮಕ್ಕಳಿರುವರು.’’

2 ನಿಮ್ಮ ಡೇರೆಗಳನ್ನು ವಿಸ್ತರಿಸಿರಿ. ನಿಮ್ಮ ಬಾಗಿಲುಗಳನ್ನು ಅಗಲವನ್ನಾಗಿ ಮಾಡಿರಿ. ನಿಮ್ಮ ಮನೆಯನ್ನು ಅಭಿವೃದ್ಧಿಪಡಿಸಿರಿ. ನಿಮ್ಮ ಡೇರೆಯನ್ನು ದೊಡ್ಡದಾಗಿಯೂ ಬಲವಾಗಿಯೂ ಮಾಡಿರಿ.

3 ಯಾಕೆಂದರೆ ನೀವು ಅಧಿಕವಾಗಿ ಬೆಳೆಯುವಿರಿ. ನಿಮ್ಮ ಮಕ್ಕಳು ಅನೇಕ ಜನಾಂಗಗಳಿಂದ ಜನರನ್ನು ಪಡೆದುಕೊಳ್ಳುವರು. ಕೆಡವಿಹಾಕಿದ ಪಟ್ಟಣಗಳಲ್ಲಿ ನಿಮ್ಮ ಮಕ್ಕಳು ತಿರಿಗಿ ವಾಸಿಸುವರು.

4 ಹೆದರಬೇಡಿರಿ, ನೀವು ನಿರಾಶರಾಗುವದಿಲ್ಲ. ಜನರು ನಿಮ್ಮ ವಿಷಯವಾಗಿ ಕೆಟ್ಟದ್ದನ್ನು ಆಡುವದಿಲ್ಲ. ನೀವು ಬೇಸರಗೊಳ್ಳುವದಿಲ್ಲ. ನೀವು ಎಳೆಯವರಾಗಿರುವಾಗ ನಿಮಗೆ ನಾಚಿಕೆ ಆಯಿತು. ಆದರೆ ಈಗ ನೀವು ಆ ನಾಚಿಕೆಯನ್ನು ಮರೆತು ಬಿಟ್ಟವರಾಗಿದ್ದೀರಿ. ನಿಮ್ಮ ಗಂಡನನ್ನು ನೀವು ಕಳೆದುಕೊಂಡಾಗ ನೀವು ಪಟ್ಟ ನಾಚಿಕೆಯನ್ನು ಜ್ಞಾಪಕ ಮಾಡಿಕೊಳ್ಳುವದಿಲ್ಲ.

5 ಯಾಕೆಂದರೆ ನಿಮ್ಮ ಗಂಡನೇ (ದೇವರು) ನಿನ್ನನ್ನು ನಿರ್ಮಿಸಿದನು. ಆತನ ಹೆಸರು ಸರ್ವಶಕ್ತನಾದ ಯೆಹೋವನು. ಆತನು ಇಸ್ರೇಲನ್ನು ಕಾಪಾಡುವಾತನಾಗಿದ್ದಾನೆ. ಆತನು ಇಸ್ರೇಲಿನ ಪರಿಶುದ್ಧನಾಗಿದ್ದಾನೆ. ಆತನನ್ನು ‘‘ಇಡೀ ಭೂಲೋಕದ ದೇವರು’’ ಎಂದು ಕರೆಯುವರು.

6 ನೀವು ಗಂಡಬಿಟ್ಟ ಹೆಂಗಸಿನಂತಿದ್ದೀರಿ. ನಿಮ್ಮ ಆತ್ಮದಲ್ಲಿ ನೀವು ತುಂಬಾ ದುಃಖಿತರಾಗಿರುವಿರಿ. ಆದರೆ ಯೆಹೋವನು ನಿಮ್ಮನ್ನು ತನ್ನವರನ್ನಾಗಿ ಮಾಡಲು ಕರೆದನು. ಎಳೇ ಪ್ರಾಯದಲ್ಲಿ ಮದುವೆಯಾದ ಮತ್ತು ಗಂಡಬಿಟ್ಟ ಹೆಂಗಸಿನಂತೆ ನೀವಿದ್ದೀರಿ. ಆದರೆ ದೇವರು ತನ್ನವರನ್ನಾಗಿ ಮಾಡಿಕೊಳ್ಳಲು ನಿಮ್ಮನ್ನು ಕರೆದನು.

7 ದೇವರು ಹೇಳುವದೇನೆಂದರೆ: ‘‘ನಾನು ನಿಮ್ಮನ್ನು ತೊರೆದೆನು. ಆದರೆ ಸ್ವಲ್ಪ ಸಮಯಕ್ಕಾಗಿ ಮಾತ್ರ. ನಿಮ್ಮನ್ನು ಮತ್ತೆ ನನಗಾಗಿ ಒಟ್ಟುಗೂಡಿಸುವೆನು. ಆಗ ನಿಮಗೆ ಅತ್ಯಂತ ದಯೆಯನ್ನು ತೋರಿಸುವೆನು.

8 ನಾನು ತುಂಬಾ ಸಿಟ್ಟುಗೊಂಡಿದ್ದೆನು ಮತ್ತು ಸ್ವಲ್ಪ ಕಾಲಕ್ಕೆ ನಿಮಗೆ ಮರೆಯಾದೆನು. ಆದರೆ ನಿಮ್ಮನ್ನು ಕರುಣೆಯಿಂದ ನಿರಂತರವೂ ಸಂತೈಸುವೆನು.’’ ನಿಮ್ಮ ರಕ್ಷಕನಾದ ಯೆಹೋವನ ನುಡಿಗಳಿವು.

### ದೇವರು ತನ್ನ ಜನರನ್ನು ಯಾವಾಗಲೂ ಪ್ರೀತಿಸುವನು

9 ದೇವರು ಹೇಳುವದೇನೆಂದರೆ: ‘‘ನೋಹನ ಕಾಲದಲ್ಲಿ ನಾನು ಲೋಕವನ್ನು ಪ್ರವಾಹದ ಮೂಲಕ ಶಿಕ್ಷಿಸಿದ್ದನ್ನು ಜ್ಞಾಪಕಮಾಡಿಕೊಳ್ಳಿರಿ. ಆ ಬಳಿಕ ನಾನು ನೋಹನಿಗೆ ಪ್ರಪಂಚವನ್ನು ಪ್ರವಾಹದಿಂದ ಇನ್ನೆಂದಿಗೂ ನಾಶಪಡಿಸುವದಿಲ್ಲ ಎಂದು ವಾಗ್ದಾನ ಮಾಡಿದೆನು. ಅದೇ ರೀತಿಯಲ್ಲಿ ಇನ್ನೆಂದಿಗೂ ನಿಮ್ಮ ಮೇಲೆ ಕೋಪಗೊಳ್ಳುವುದಿಲ್ಲವೆಂತಲೂ ನಿಮ್ಮನ್ನು ಗದರಿಸುವುದಿಲ್ಲವೆಂತಲೂ ನಾನು ನಿಮಗೆ ವಾಗ್ದಾನ ಮಾಡುತ್ತೇನೆ.’’

10 ಯೆಹೋವನು ಹೇಳುವದೇನೆಂದರೆ, ''ಪರ್ವತ
ಗಳು ಇಲ್ಲದೆ ಹೋದರೂ ಬೆಟ್ಟಗಳು ಧೂಳಾ
ದರೂ. ನನ್ನ ಕೃಪೆಯು ನಿಮ್ಮನ್ನು ಎಂದಿಗೂ ತೊರೆ
ಯದು. ನಾನು ನಿಮ್ಮೊಂದಿಗೆ ನಿತ್ಯಕಾಲದ ಸಮಾ
ಧಾನದಲ್ಲಿ ಇರುವೆನು.'' ಯೆಹೋವನು ನಿಮಗೆ
ಕರುಣೆಯನ್ನು ತೋರುವನು. ಆತನೇ ಇದನ್ನು
ಹೇಳಿದನು.
11 ಒಡನಗರಿಯೇ, ನಿನ್ನ ವೈರಿಗಳು ನಿನಗೆ ವಿರೋಧ
ವಾಗಿ ಬಿರುಗಾಳಿಯಂತೆ ಬಂದಾಗ ಯಾರೂ
ನಿನ್ನನ್ನು ಸಂತೈಸಲಿಲ್ಲ. ಆದರೆ ನಾನು ಮತ್ತೆ ನಿನ್ನನ್ನು
ನಿರ್ಮಿಸುವೆನು. ನಿನ್ನ ಗೋಡೆಗಳ ಕಲ್ಲುಗಳನ್ನು
ಕಟ್ಟಲು ಸುಂದರವಾದ ನಾಲೆಯನ್ನು ಉಪ
ಯೋಗಿಸುವೆನು. ನಾನು ಅಡಿಪಾಯ ಹಾಕುವಾಗ
ಮಾಣಿಕ್ಯಗಳನ್ನು ಹಾಕುವೆನು.
12 ಗೋಡೆಯ ಮೇಲಿರುವ ಕಲ್ಲುಗಳೆಲ್ಲಾ ಕೆಂಪು ಕಲ್ಲು
ಗಳೇ. ಹೊಳೆಯುವ ವಜ್ರಗಳಿಂದ ನಾನು ಹೊರ
ಬಾಗಲನ್ನು ತಯಾರಿಸುವೆನು. ನಿನ್ನ ಸುತ್ತಲೂ
ಗೋಡೆಯನ್ನು ನಾನು ಅಮೂಲ್ಯವಾದ ಕಲ್ಲುಗ
ಳಿಂದ ಕಟ್ಟುವೆನು.

13 ನಿನ್ನ ಮಕ್ಕಳು ದೇವರನ್ನು ಅನುಸರಿಸುವರು. ಆತನು
ಅವರಿಗೆ ಬೋಧಿಸುವನು. ನಿನ್ನ ಮಕ್ಕಳಿಗೆ ನಿಜವಾದ
ಶಾಂತಿ ಇರುವದು.
14 ನೀನು ಒಳ್ಳೆಯತನದಿಂದ ಕಟ್ಟಲ್ಪಡುವೆ. ಆದುದ
ರಿಂದ ಎಲ್ಲಾ ದುಷ್ಟತ್ವಗಳಿಂದ ನೀನು ಸುರಕ್ಷಿತಳಾಗಿ
ರುವೆ. ನೀನು ಯಾವದಕ್ಕೂ ಹೆದರುವ ಅವಶ್ಯವಿಲ್ಲ.
ಯಾವುದೂ ನಿನಗೆ ಹಾನಿ ಮಾಡದು.
15 ನಿನಗೆ ವಿರುದ್ಧವಾಗಿ ನನ್ನ ಯಾವ ಸೈನ್ಯವೂ ಯುದ್ಧ
ಮಾಡದು. ಯಾರಾದರೂ ನಿನ್ನ ಮೇಲೆ ಆಕ್ರಮಣ
ಮಾಡಿದರೆ ಆ ಶತ್ರುವನ್ನು ನೀನು ಗೆಲ್ಲುವೆ.

16''ಇಗೋ, ನಾನು ಕಮ್ಮಾರನನ್ನು ಮಾಡಿದೆನು.
ಅವನು ಬೆಂಕಿಯನ್ನು ಊದಿ ಬಿಸಿಯನ್ನು ಹೆಚ್ಚಿಸುವನು.
ಆಮೇಲೆ ಕೆಂಪಾಗಿ ಕಾದ ಕಬ್ಬಿಣವನ್ನು ಹೊರತೆಗೆದು
ತನಗಿಷ್ಟವಾದ ಉಪಕರಣವನ್ನು ತಯಾರಿಸುವನು. ಅದೇ
ರೀತಿಯಲ್ಲಿ ನಾಶಮಾಡುವ 'ನಾಶಕನನ್ನು' ನಾನು
ನಿರ್ಮಿಸಿದೆನು.
17''ನಿನಗೆ ವಿರುದ್ಧವಾಗಿ ಯುದ್ಧಮಾಡಲು ಜನರು
ಆಯುಧಗಳನ್ನು ತಯಾರಿಸುವರು. ಆದರೆ ಆ ಆಯುಧ
ಗಳು ನಿನ್ನನ್ನು ಸೋಲಿಸಲಾರವು. ಅವರು ನಿನಗೆ ವಿರುದ್ಧ
ವಾಗಿ ಮಾತಾಡಿದರೂ ಆ ಮಾತುಗಳು ನಿನ್ನನ್ನು ತಪ್ಪಿತಸ್ಥ
ನೆಂದು ತೋರಿಸಲಾರವು. ''ಯೆಹೋವನ ಸೇವಕರಿಗೆ
ದೊರೆಯುವುದೇನು? ಅವರಿಗೆ ಆತನಿಂದಲೇ ಸುಫಲ
ಗಳು ದೊರೆಯುತ್ತವೆ.''

### ತೃಪ್ತಿಗೊಳಿಸುವ ಆಹಾರವನ್ನು ದೇವರು ಕೊಡುತ್ತಾನೆ

55 ''ಎಲ್ಲೈ ಬಾಯಾರಿದ ಜನರೆಲ್ಲರೇ, ಬಂದು
ನೀರನ್ನು ಕುಡಿಯಿರಿ. ನಿಮ್ಮಲ್ಲಿ ಹಣವಿಲ್ಲ
ವೆಂದು ಚಿಂತೆಮಾಡಬೇಡಿರಿ. ಬಂದು ಹೊಟ್ಟೆ
ತುಂಬಾ ತಿಂದು ಕುಡಿಯಿರಿ. ನೀವು ಹಣ ಕೊಡ
ಬೇಕಿಲ್ಲ. ಹೊಟ್ಟೆತುಂಬಾ ತಿಂದು ಕುಡಿಯಿರಿ
ಹಾಲಿಗೂ ದ್ರಾಕ್ಷಾರಸಕ್ಕೂ ಕ್ರಯವಿಲ್ಲ.
2 ಆಹಾರವಲ್ಲದ್ದಕ್ಕಾಗಿ ಹಣವನ್ನು ಯಾಕೆ ವೆಚ್ಚ
ಮಾಡುತ್ತೀರಿ? ತೃಪ್ತಿಗೊಳಿಸದ ಆಹಾರಕ್ಕಾಗಿ ನೀವು
ಯಾಕೆ ಶ್ರಮಿಸುತ್ತೀರಿ? ಗಮನವಿಟ್ಟು ಕೇಳಿರಿ.
ನೀವು ಒಳ್ಳೆಯ ಆಹಾರವನ್ನು ತಿನ್ನುವಿರಿ; ನಿಮ್ಮ
ಊಟದಲ್ಲಿ ಆನಂದಿಸುವಿರಿ. ಅವು ನಿಮ್ಮ ಆತ್ಮವನ್ನು
ತೃಪ್ತಿಗೊಳಿಸುತ್ತವೆ.
3 ನಾನು ಹೇಳುವ ವಿಷಯಗಳಿಗೆ ಸರಿಯಾಗಿ ಕಿವಿ
ಗೊಡಿರಿ. ನಿಮ್ಮ ಆತ್ಮಗಳು ಜೀವಿಸುವಂತೆ ನನ್ನ
ಮಾತುಗಳನ್ನು ಕೇಳಿರಿ. ನನ್ನ ಬಳಿಗೆ ಬನ್ನಿರಿ, ನಾನು
ನಿಮ್ಮೊಂದಿಗೆ ನಿತ್ಯಕಾಲದ ಒಡಂಬಡಿಕೆಯನ್ನು
ಮಾಡಿಕೊಳ್ಳುವೆನು. ನಾನು ದಾವೀದನೊಂದಿಗೆ
ಮಾಡಿಕೊಂಡ ಒಡಂಬಡಿಕೆಯಂತೆ ಅದಿರುವುದು.
ನಾನು ದಾವೀದನಿಗೆ ಅವನನ್ನು ಪ್ರೀತಿಸುವುದಾ
ಗಿಯೂ ಅವನಿಗೆ ನಂಬಿಗಸ್ತನಾಗಿರುವುದಾಗಿಯೂ
ವಾಗ್ದಾನ ಮಾಡಿದ್ದೆನು. ಆ ಒಡಂಬಡಿಕೆಯನ್ನು
ನೀವು ಖಂಡಿತವಾಗಿ ನಂಬಬಹುದು.''
4 ದಾವೀದನು ನನ್ನ ಸಾಮರ್ಥ್ಯದ ವಿಷಯದಲ್ಲಿ ಎಲ್ಲ
ಜನಾಂಗಗಳವರಿಗೆ ಸಾಕ್ಷಿಯಾಗಿರುವಂತೆ ನಾನೇ
ಮಾಡಿದೆನು. ನಾನು ದಾವೀದನಿಗೆ, ''ನೀನು
ಅಧಿಪತಿಯಾಗುವೆ ಮತ್ತು ಅನೇಕ ಜನಾಂಗಗಳಿಗೆ
ನೀನು ಸೈನ್ಯಾಧಿಪತಿಯಾಗುವೆ'' ಎಂದು ಪ್ರಮಾಣ
ಮಾಡಿದೆ,''
5 ನಿನಗೆ ಗೊತ್ತಿರದ ಸ್ಥಳಗಳಲ್ಲಿ ಜನಾಂಗಗಳು ನೆಲೆ
ಸಿವೆ. ಆ ದೇಶಗಳನ್ನು ನೀನು ಕರೆಯುವೆ. ಆ ದೇಶ
ಗಳಿಗೆ ನಿನ್ನ ಪರಿಚಯವಿರುವದಿಲ್ಲ. ಆದರೆ ಅವು
ಗಳು ನಿನ್ನ ಬಳಿಗೆ ಓಡಿಬರುವವು. ಇವೆಲ್ಲಾ ನಿನ್ನ
ದೇವರಾದ ಯೆಹೋವನ ಚಿತ್ತಕ್ಕನುಸಾರವಾಗಿ
ಆಗುತ್ತವೆ. ಇಸ್ರೇಲಿನ ಪರಿಶುದ್ಧನು ನಿನ್ನನ್ನು
ಗೌರವಿಸುವದರಿಂದ ಇದನ್ನು ನೆರವೇರಿಸುವನು.
6 ಆದುದರಿಂದ ಸಮಯವು ದಾಟುವ ಮೊದಲು
ನೀವು ಯೆಹೋವನಿಗಾಗಿ ಹುಡುಕಿರಿ. ಆತನು
ಹತ್ತಿರವಿರುವಾಗಲೇ ಕರೆಯಿರಿ.

7 ಕೆಟ್ಟಜನರು ಕೆಟ್ಟತನದಲ್ಲಿ ಜೀವಿಸುವದನ್ನು ನಿಲ್ಲಿಸಲಿ. ಅವರು ಕೆಟ್ಟ ಆಲೋಚನೆಗಳನ್ನು ಮಾಡದಿರಲಿ. ಅವರು ಯೆಹೋವನ ಬಳಿಗೆ ಹಿಂತಿರುಗಲಿ. ಆಗ ಯೆಹೋವನು ಅವರನ್ನು ಆದರಿಸುವನು. ದೇವರಾದ ಯೆಹೋವನು ಕ್ಷಮಿಸುವುದರಿಂದ ಅವರು ಆತನ ಬಳಿಗೆ ಬರಲಿ.

### ಜನರು ದೇವರನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿಲ್ಲ

8 ಯೆಹೋವನು ಹೇಳುವದೇನೆಂದರೆ: ''ನಿಮ್ಮ ಆಲೋಚನೆಗಳು ನನ್ನ ಆಲೋಚನೆಗಳಲ್ಲ. ನಿಮ್ಮ ಮಾರ್ಗಗಳು ನನ್ನ ಮಾರ್ಗಗಳಲ್ಲ.

9 ಆಕಾಶವು ಭೂಮಿಗಿಂತ ಎಷ್ಟು ಎತ್ತರವಾಗಿದೆಯೋ ನನ್ನ ಆಲೋಚನೆಗಳು ನಿಮ್ಮ ಆಲೋಚನೆಗಳಿಗಿಂತ ಅಷ್ಟೇ ಉನ್ನತವಾಗಿವೆ; ನನ್ನ ಮಾರ್ಗಗಳು ನಿಮ್ಮ ಮಾರ್ಗಗಳಿಗಿಂತ ಅಷ್ಟೇ ಉನ್ನತವಾಗಿವೆ. ಇದು ಯೆಹೋವನ ನುಡಿ.

10 ಮಳೆಯೂ ಹಿಮವೂ ಆಕಾಶದಿಂದ ಬೀಳುವವು. ಅವು ನೆಲವನ್ನು ತೇವ ಮಾಡದೆ ಆಕಾಶಕ್ಕೆ ಹಿಂತಿರುಗುವುದಿಲ್ಲ. ಆಗ ನೆಲವು ಬೀಜವನ್ನು ತೋಯಿಸಿ ಸಸಿ ಚಿಗುರುವಂತೆ ಮಾಡುವದು. ಆ ಸಸಿಗಳು ವ್ಯವಸಾಯಗಾರನಿಗೆ ಧಾನ್ಯವನ್ನು ಫಲಿಸುತ್ತವೆ. ಜನರು ಆ ದಾನ್ಯದಿಂದ ರೊಟ್ಟಿಗಳನ್ನು ಮಾಡುವರು.

11 ಅದೇ ಪ್ರಕಾರ ನನ್ನ ಬಾಯಿಂದ ಹೊರಟ ಮಾತುಗಳು ಯೋಚಿಸಿದ ಕಾರ್ಯಗಳನ್ನು ಮಾಡದೆ ಹಿಂತಿರುಗುವುದಿಲ್ಲ. ನನ್ನ ಮಾತುಗಳು ನನ್ನ ಆಲೋಚನೆಗೆ ಸರಿಯಾಗಿ ಕಾರ್ಯಮಾಡುವವು. ನನ್ನ ಮಾತುಗಳು ತಮಗೆ ನೇಮಕವಾದ ಆ ಕಾರ್ಯಗಳನ್ನು ಮಾಡಿ ಮುಗಿಸುವವು.

12 ನನ್ನ ಮಾತುಗಳು ಸಂತೋಷದಿಂದ ಹೊರಡುವವು ಮತ್ತು ಸಮಾಧಾನವನ್ನು ತರುವವು. ಪರ್ವತಗಳೂ ಬೆಟ್ಟಗಳೂ ಸಂತೋಷದಿಂದ ಕುಣಿದಾಡುವವು. ಭೂಮಿಯ ಮೇಲಿರುವ ಮರಗಳೆಲ್ಲಾ ಚಪ್ಪಾಳೆ ತಟ್ಟುವವು.

13 ಪೊದೆಗಳು ಇದ್ದ ಸ್ಥಳಗಳಲ್ಲಿ ಎತ್ತರವಾದ ದೇವದಾರು ಮರಗಳು ಬೆಳೆಯುವವು. ಹಣಜಿಯಿರುವ ಸ್ಥಳಗಳಲ್ಲಿ ಸುಗಂಧ ಮರಗಳು ಬೆಳೆಯುವವು. ಇವು ಯೆಹೋವ ನಾಮವನ್ನು ಪ್ರಸಿದ್ಧಿಪಡಿಸುವವು. ಯೆಹೋವನೇ ಸರ್ವಶಕ್ತನೆಂದು ಇವು ತೋರಿಸುವವು. ಈ ಸಾಕ್ಷಿಯು ಎಂದಿಗೂ ನಾಶವಾಗುವದಿಲ್ಲ.''

### ಎಲ್ಲಾ ಜನಾಂಗದವರು ಯೆಹೋವನನ್ನು ಅನುಸರಿಸುವರು

56 ಯೆಹೋವನು ಹೇಳುವದೇನೆಂದರೆ: ''ಎಲ್ಲರಿಗೂ ನ್ಯಾಯವಂತರಾಗಿರಿ; ಎಲ್ಲರಿಗೂ ಒಳ್ಳೆಯವರಾಗಿರಿ; ಯಾಕೆಂದರೆ ನನ್ನ ರಕ್ಷಣೆಯು ಬೇಗನೆ ಬರಲಿದೆ; ಇಡೀ ಲೋಕಕ್ಕೆಲ್ಲಾ ನನ್ನ ನೀತಿಯು ಬೇಗನೆ ವ್ಯಕ್ತವಾಗುವುದು.''

2 ಸಬ್ಬತ್ತಿನ ವಿಷಯದಲ್ಲಿ ದೇವರ ಕಟ್ಟಳೆಗಳನ್ನು
ಅನುಸರಿ ಸುವವರು ಆಶೀರ್ವಾದ ಹೊಂದುವರು. ದುಷ್ಟ
ಕಾರ್ಯಗಳನ್ನು ಮಾಡದವನು ಸಂತೋಷದಿಂದಿರು
ವನು. 3 ಯೆಹೂದ್ಯರಲ್ಲದ ಜನರು ಯೆಹೋವನ ಬಳಿಗೆ
ಬರುವರು. ಅವರು, ''ಯೆಹೋವನು ನಮ್ಮನ್ನು ತನ್ನ
ಜನರೊಂದಿಗೆ ಸ್ವೀಕರಿಸುವದಿಲ್ಲ'' ಎಂದು ಹೇಳ
ಬಾರದು. ಕಂಚುಕಿಯು, ''ನಾನು ಕೆಲಸಕ್ಕೆ ಬಾರದ ಒಣ
ಗಿದ ಮರ. ನಾನು ಮಕ್ಕಳನ್ನು ಪಡೆಯಲಾರೆನು'' ಎಂದು
ಹೇಳಬಾರದು.

4-5 ಯಾಕೆಂದರೆ ಯೆಹೋವನು ಹೇಳುವದೇನೆಂದರೆ:
''ಈ ಕಂಚುಕಿಯರಲ್ಲಿ ಕೆಲವರು ಸಬ್ಬತ್ ನಿಯಮವನ್ನು
ಅನುಸರಿಸುತ್ತಾರೆ. ಅವರು ನನ್ನ ಇಷ್ಟಪ್ರಕಾರ ನಡೆದು
ಕೊಳ್ಳುತ್ತಾರೆ; ಅವರು ನನ್ನ ಒಡಂಬಡಿಕೆಗೆ ಸರಿಯಾಗಿ
ನಡೆಯುತ್ತಾರೆ. ಆದುದರಿಂದ ನಾನು ಅವರಿಗೋಸ್ಕರ
ನನ್ನ ಮಂದಿರದಲ್ಲಿ ಸ್ಮಾರಕಸ್ತಂಭ ನೆಡುವೆನು. ನನ್ನ ಪಟ್ಟಣ
ದಲ್ಲಿ ಅವರ ಹೆಸರುಗಳು ಜ್ಞಾಪಕಮಾಡಲ್ಪಡುವವು.
ಹೌದು, ಆ ಕಂಚುಕಿಗೆ ನಾನು ಮಕ್ಕಳಿಗಿಂತ ಉತ್ತಮ
ವಾದದ್ದನ್ನು ಕೊಡುವೆನು. ಅವರಿಗೆ ನಿತ್ಯಕಾಲಕ್ಕೂ ಇರುವ
ಹೆಸರನ್ನು ಕೊಡುವೆನು. ನನ್ನ ಜನರಿಂದ ಅವರನ್ನು
ಬೇರ್ಪಡಿಸುವುದಿಲ್ಲ.''

6 ಯೆಹೂದ್ಯರಲ್ಲದವರಲ್ಲಿ ಕೆಲವರು ಯೆಹೋವನನ್ನು
ಅನುಸರಿಸುವರು. ಆತನನ್ನು ಸೇವಿಸಿ ಆತನ ನಾಮವನ್ನು
ಪ್ರೀತಿಸುವರು. ಅವರು ಯೆಹೋವನ ಸೇವಕರಾಗುವುದ
ಕ್ಕಾಗಿ ಆತನೊಂದಿಗೆ ಸೇರಿಕೊಳ್ಳುವರು. ಸಬ್ಬತ್ ದಿವಸ
ವನ್ನು ಆರಾಧನೆ ಮಾಡುವ ವಿಶೇಷ ದಿವಸವೆಂದು ನೆನಸಿ
ಒಡಂಬಡಿಕೆಯನ್ನು ಪರಿಪಾಲಿಸುವರು.

7 ಯೆಹೋವನು ಹೇಳುವದೇನೆಂದರೆ: ''ನಾನು ಅವ
ರನ್ನು ನನ್ನ ಪವಿತ್ರಪರ್ವತಕ್ಕೆ ತರುವೆನು: ನನ್ನ ಪ್ರಾರ್ಥನಾ
ಲಯದಲ್ಲಿ ಅವರನ್ನು ಸಂತೋಷಪಡಿಸುವೆನು. ಅವರು
ಅರ್ಪಿಸುವ ಸರ್ವಾಂಗಹೋಮಗಳನ್ನೂ ಯಜ್ಞಗಳನ್ನೂ
ನಾನು ಮೆಚ್ಚಿಕೊಳ್ಳುವೆನು. ಯಾಕೆಂದರೆ ನನ್ನ ಆಲಯವು
ಎಲ್ಲಾ ಜನಾಂಗದವರಿಗೆ ಪ್ರಾರ್ಥನಾಲಯವೆಂದು
ಕರೆಯಲ್ಪಡುವದು.'' 8 ಇದು ನನ್ನ ಒಡೆಯನಾದ
ಯೆಹೋವನ ಮಾತುಗಳು.

ಇಸ್ರೇಲ್ ಜನರು ತಮ್ಮ ದೇಶದಿಂದ ಹೊರಗೆ

ಹಾಕಲ್ಪಟ್ಟರು. ಆದರೆ ಯೆಹೋವನು ಅವರನ್ನು ಮತ್ತೆ ಬರಮಾಡುತ್ತಾನೆ. ''ಈ ಜನರನ್ನು ನಾನು ಮತ್ತೆ ಒಟ್ಟುಗೂಡಿಸುತ್ತೇನೆ'' ಎಂದು ಯೆಹೋವನು ಹೇಳುತ್ತಾನೆ.

### ತನ್ನ ಸೇವೆಗಾಗಿ ದೇವರ ಕರೆ

9 ಕಾಡುಗಳಲ್ಲಿಯೂ ಹೊಲಗಳಲ್ಲಿಯೂ ಇರುವ ಪ್ರಾಣಿಗಳೇ, ಬಂದು ತಿನ್ನಿರಿ!

10 ಕಾವಲುಗಾರರೆಲ್ಲಾ ಕುರುಡರಾಗಿದ್ದಾರೆ. ತಾವು ಮಾಡುತ್ತಿರುವುದು ಅವರಿಗೆ ತಿಳಿಯದು. ಅವರು ಬೊಗಳದ ನಾಯಿಗಳಂತಿರುವರು. ಅವುಗಳು ನೆಲದ ಮೇಲೆ ಬಿದ್ದುಕೊಂಡು ಮಲಗುವವು. ಅವುಗಳಿಗೆ ಮಲಗುವದೆಂದರೆ ತುಂಬಾ ಪ್ರೀತಿ.

11 ಅವರು ಹಸಿದ ನಾಯಿಗಳಂತಿದ್ದಾರೆ. ಅವರು ಎಂದಿಗೂ ತೃಪ್ತಿ ಹೊಂದುವವರಲ್ಲ. ಕುರುಬರಿಗೆ ತಾವು ಮಾಡುವುದೇ ತಿಳಿಯದು. ಅವರು ತಮ್ಮ ಕುರಿಗಳ ಹಾಗೆ ದಾರಿತಪ್ಪಿದ್ದಾರೆ. ಅವರೆಲ್ಲಾ ಅತ್ಯಾಶೆಯುಳ್ಳವರು; ತಮ್ಮನ್ನು ತೃಪ್ತಿಪಡಿಸುವದೇ ಅವರ ಕೆಲಸ.

12 ಅವರು ಬಂದು, ''ನಾನು ಸ್ವಲ್ಪ ದ್ರಾಕ್ಷಾರಸ ಕುಡಿಯುತ್ತೇನೆ. ಅಥವಾ ನಾನು ಸ್ವಲ್ಪ ಮದ್ಯವನ್ನು ಕುಡಿಯುತ್ತೇನೆ. ನಾನು ನಾಳೆಯೂ ಹೀಗೆ ಮಾಡುವೆನು. ನಾನು ಇನ್ನೂ ಹೆಚ್ಚಾಗಿ ಕುಡಿಯುವೆನು'' ಎಂದು ಹೇಳುವರು.

### ಇಸ್ರೇಲರು ದೇವರನ್ನು ಅನುಸರಿಸುವದಿಲ್ಲ

57 ನೀತಿವಂತರು ಇಲ್ಲವಾಗುವರು; ಯಾರೂ ಅದನ್ನು ಗಮನಿಸರು. ನೀತಿವಂತರು ಗತಿಸಿ ಹೋಗುವರು; ಅದಕ್ಕೆ ಕಾರಣವೇನೆಂದು ಯಾರೂ ಗ್ರಹಿಸರು. ಕೇಡಿನಿಂದ ಪಾರಾಗಲೆಂದೇ ನೀತಿವಂತರಿಗೆ ಹೀಗಾಯಿತು.

2 ಆದರೆ ಶಾಂತಿ ಸಮಾಧಾನಗಳು ಬರುತ್ತವೆ. ಆಗ ಜನರು ತಮ್ಮ ಸ್ವಂತ ಹಾಸಿಗೆಗಳ ಮೇಲೆ ವಿಶ್ರಮಿಸಿಕೊಳ್ಳುವರು; ದೇವರು ಅಪೇಕ್ಷಿಸುವ ರೀತಿಯಲ್ಲಿ ಜೀವಿಸುವರು.

3 ''ಮಾಟಗಾರ್ತಿಯ ಮಕ್ಕಳೇ, ಇಲ್ಲಿಗೆ ಬನ್ನಿರಿ. ನಿಮ್ಮ ತಂದೆಯು ವ್ಯಭಿಚಾರದ ಅಪರಾಧವೆಸಗಿದ್ದಾನೆ. ನಿಮ್ಮ ತಾಯಿಯು ಸೂಳೆಯಾಗಿ ತನ್ನ ದೇಹವನ್ನು ಮಾರುತ್ತಿದ್ದಾಳೆ. ಇಲ್ಲಿಗೆ ಬನ್ನಿರಿ.

4 ನೀವು ಸುಳ್ಳು ಹೇಳುವ ದುಷ್ಟಮಕ್ಕಳು. ನೀವು ನನ್ನನ್ನು ಪರಿಹಾಸ್ಯ ಮಾಡುತ್ತೀರಿ. ನನ್ನನ್ನು ಹಿಯ್ಯಾಳಿಸುತ್ತೀರಿ; ನಿಮ್ಮ ನಾಲಿಗೆಯನ್ನು ನನ್ನತ್ತ ಚಾಚುತ್ತೀರಿ.

5 ನಿಮಗೆ ಮಾಡಬೇಕೆನ್ನುವುದು, ಪ್ರತಿಯೊಂದು ಹಸಿರು ಮರದಡಿಯಲ್ಲಿ ಸುಳ್ಳುದೇವರ ಪೂಜೆ ಮಾಡುವದೊಂದನ್ನೇ ನೀವು ಬಯಸುತ್ತೀರಿ. ಪ್ರತಿಯೊಂದು ನೀರಿನ ಬುಗ್ಗೆಗಳ ಬಳಿಯಲ್ಲಿ ನಿಮ್ಮ ಮಕ್ಕಳನ್ನು ಕೊಂದು ಬಂಡೆಕಲ್ಲಿನ ಮೇಲೆ ಅವರ ಯಜ್ಞಮಾಡುವಿರಿ.

6 ನದಿದಡದಲ್ಲಿರುವ ನುಣುಪಾದ ಕಲ್ಲುಗಳನ್ನು ಪೂಜಿಸಲು ಆಶಿಸುತ್ತೀರಿ. ಅದರ ಮೇಲೆ ದ್ರಾಕ್ಷಾರಸ ಸುರಿದು ಪೂಜೆ ಮಾಡುತ್ತೀರಿ. ಅವುಗಳಿಗೆ ಬಲಿಯರ್ಪಿಸುತ್ತೀರಿ. ಆದರೆ ಅದರಿಂದ ನಿಮಗೆ ದೊರಕುವುದು ಕಲ್ಲೇ. ಈ ವಿಷಯ ನನ್ನನ್ನು ಸಂತೋಷಗೊಳಿಸುತ್ತದೆಂದು ನೆನಸುತ್ತೀರೋ? ಇಲ್ಲ. ಅವು ನನ್ನನ್ನು ಸಂತೋಷಪಡಿಸುವದಿಲ್ಲ. ಪ್ರತಿಯೊಂದು ಬೆಟ್ಟ ಮತ್ತು ಉನ್ನತ ಶಿಖರಗಳ ಮೇಲೆ ನಿಮ್ಮ ಹಾಸಿಗೆಯನ್ನು ಹಾಸುವಿರಿ.

7 ನೀವು ಅಲ್ಲಿಗೆ ಹೋಗಿ ಬಲಿಯರ್ಪಿಸುತ್ತೀರಿ.

8 ಆ ಬಳಿಕ ಆ ಹಾಸಿಗೆಯ ಮೇಲೆ ಮಲಗಿ ಆ ದೇವರುಗಳನ್ನು ಪ್ರೀತಿಸಿ ನನಗೆ ವಿರುದ್ಧವಾಗಿ ಪಾಪ ಮಾಡುತ್ತೀರಿ. ನೀವು ಆ ದೇವರುಗಳನ್ನು ಪ್ರೀತಿಸುತ್ತೀರಿ. ಅವುಗಳ ಬೆತ್ತಲೆ ಶರೀರಗಳನ್ನು ನೋಡುವದರಲ್ಲಿ ಸಂತೋಷಿಸುವಿರಿ. ನೀವು ನನ್ನೊಂದಿಗೆ ಇದ್ದಿರಿ. ಆದರೆ ಈಗ ನನ್ನನ್ನು ತೊರೆದು ಅವುಗಳನ್ನು ಸೇರಿಕೊಂಡಿದ್ದೀರಿ. ನನ್ನನ್ನು ಜ್ಞಾಪಕ ಹುಟ್ಟಿಸುವ ವಿಷಯಗಳನ್ನು ನೀವು ಅಡಗಿಸಿಡುತ್ತೀರಿ. ಅವುಗಳನ್ನು ಬಾಗಿಲ ಹಿಂದೆ ಅಡಗಿಸಿಡುತ್ತೀರಿ. ಆನಂತರ ನೀವು ಹೋಗಿ ಆ ಸುಳ್ಳು ದೇವರೊಂದಿಗೆ ಒಡಂಬಡಿಕೆ ಮಾಡುತ್ತೀರಿ.

9 ಮೋಲೆಕನಿಗೆ ಅಂದವಾಗಿ ತೋರುವಂತೆ ನೀವು ನಿಮಗೆ ಎಣ್ಣೆ, ಸುಗಂಧ ದ್ರವ್ಯಗಳನ್ನು ಹಚ್ಚಿಕೊಂಡು ಹೋಗುವಿರಿ. ನಿಮ್ಮ ದೂತರನ್ನು ದೂರದೇಶಕ್ಕೆ ಕಳುಹಿಸುತ್ತೀರಿ. ಇವೇ ನಿಮ್ಮನ್ನು ನರಕಕ್ಕೆ ನಡಿಸುತ್ತವೆ. ಅಲ್ಲಿ ಮರಣವಿರುವದು.''

### ಇಸ್ರೇಲ್ ದೇವರೊಬ್ಬನೇ ಭರವಸೆಗೆ ಯೋಗ್ಯನು, ವಿಗ್ರಹಗಳಲ್ಲ

10 ''ಇವುಗಳನ್ನೆಲ್ಲಾ ನೀವು ಬಹು ಪ್ರಯಾಸದಿಂದ ಮಾಡಿದರೂ ಆಯಾಸಗೊಂಡಿಲ್ಲ. ಯಾಕೆಂದರೆ ಇವುಗಳನ್ನು ಮಾಡುವುದರಲ್ಲೇ ನಿಮಗೆ ಸಂತೋಷ.

11 ನೀವು ನನ್ನನ್ನು ಜ್ಞಾಪಕ ಮಾಡಿಕೊಳ್ಳಲಿಲ್ಲ. ನನ್ನನ್ನು
ಗಮನಕ್ಕೇ ತರಲಿಲ್ಲ. ಹೀಗಿರಲು ನೀವು ಯಾರ
ಬಗ್ಗೆ ಚಿಂತಿಸುತ್ತಿದ್ದಿರಿ? ನೀವು ಯಾರಿಗೆ ಭಯ
ಪಡುತ್ತಿದ್ದಿರಿ? ನೀವು ಸುಳ್ಳಾಡಿದ್ದು ಯಾಕೆ?
ನೋಡಿ, ನಾನು ಬಹಳ ಸಮಯದಿಂದ ಸುಮ್ಮ
ನಿದ್ದೆನು. ಆದರೆ ನೀವು ನನ್ನನ್ನು ಗೌರವಿಸಲಿಲ್ಲ.
12 ನೀವು ಮಾಡುವ ಧಾರ್ಮಿಕ ಕಾರ್ಯಗಳನ್ನೂ
ನಿಮ್ಮ ಒಳ್ಳೆತನವನ್ನೂ ನಾನು ಹೇಳಿದರೂ ಅವು
ಗಳೆಲ್ಲಾ ನಿಷ್ಪ್ರಯೋಜಕವಾದವುಗಳು.
13 ನಿಮಗೆ ಸಹಾಯದ ಅವಶ್ಯಕತೆ ಬಂದಾಗ ನೀವು ಆ
ಸುಳ್ಳುದೇವರುಗಳನ್ನು ಕರೆಯುವಿರಿ. ಅವುಗಳನ್ನು
ನಿಮ್ಮ ಸುತ್ತಲೂ ಸೇರಿಸಿಕೊಂಡಿರುವಿರಿ. ಆದರೆ
ನಾನು ಹೇಳುವದೇನೆಂದರೆ, ಗಾಳಿಯು ಅವುಗ
ಳನ್ನು ಬಡಿದುಕೊಂಡು ಹೋಗುವುದು. ಅವುಗಳೆ
ನ್ನೆಲ್ಲ ಉಸಿರಿನ ಗಾಳಿಯು ನಿಮ್ಮಿಂದ ದೂರಕ್ಕೆ
ಕೊಂಡೊಯ್ಯುವುದು. ಆದರೆ ನನ್ನನ್ನು ಅವಲಂಬಿ
ಸಿರುವವರು ಭೂಮಿಯನ್ನು ಪಡೆದುಕೊಳ್ಳುವರು.
ನನ್ನ ಪವಿತ್ರಪರ್ವತವನ್ನು ಬಾಧ್ಯವಾಗಿ ಹೊಂದಿ
ಕೊಳ್ಳುವರು.

### ಯೆಹೋವನು ತನ್ನ ಜನರನ್ನು ಕಾಪಾಡುವನು

14 ದಾರಿಯನ್ನು ಸರಿಪಡಿಸಿರಿ, ದಾರಿಯನ್ನು ಸರಿಪಡಿ
ಸಿರಿ! ನನ್ನ ಜನರಿಗೆ ದಾರಿಯು ಸರಾಗವಾಗಿರುವಂತೆ
ಅಡತಡೆಗಳನ್ನು ತೆಗೆದುಹಾಕಿರಿ.
15 ದೇವರು ಉನ್ನತ ಸ್ಥಾನದಲ್ಲಿ ಎತ್ತಲ್ಪಟ್ಟಿದ್ದಾನೆ.
ಆತನು ಸದಾಕಾಲ ಜೀವಿಸುತ್ತಾನೆ. ಆತನ ಹೆಸರು
ಪರಿಶುದ್ಧವಾದದ್ದು. ದೇವರು ಹೇಳುವದೇ
ನೆಂದರೆ, ನಾನು ಉನ್ನತ ಲೋಕವೆಂಬ ಪವಿತ್ರ
ಸ್ಥಳದಲ್ಲಿ ವಾಸಿಸುತ್ತೇನೆ. ಅದೇ ಸಮಯದಲ್ಲಿ
ದುಃಖಪಡುವವರೂ ದೀನರೂ ಆಗಿರುವ ಜನ
ರೊಂದಿಗೆ ವಾಸಮಾಡುತ್ತೇನೆ. ಆತ್ಮದಲ್ಲಿ ದೀನ
ರಾಗಿರುವವರಿಗೆ ನಾನು ಹೊಸ ಜನ್ಮ ಕೊಡುತ್ತೇನೆ.
ಹೃದಯದಲ್ಲಿ ದುಃಖಿಸುವವರಿಗೆ ನಾನು ಹೊಸ
ಜೀವ ಕೊಡುತ್ತೇನೆ.
16 ನಾನು ನಿತ್ಯಕಾಲಕ್ಕೂ ಯುದ್ಧ ಮಾಡುವವನಲ್ಲ.
ನಾನು ಎಂದೆಂದಿಗೂ ಕೋಪಗೊಳ್ಳುವವನಲ್ಲ.
ನಾನು ಹಾಗೆ ಮಾಡುವವನಾದರೆ ನಾನು ಕೊಟ್ಟಿ
ರುವ ಮನುಷ್ಯನ ಆತ್ಮವು ನನ್ನ ಮುಂದೆಯೇ
ಸಾಯುವದು.
17 ಈ ಜನರು ದುಷ್ಟಕೃತ್ಯಗಳನ್ನು ನಡಿಸಿ ನನಗೆ ಕೋಪ
ವನ್ನೆಬ್ಬಿಸಿದರು. ಆದ್ದರಿಂದ ನಾನು ಇಸ್ರೇಲನ್ನು
ಶಿಕ್ಷಿಸಿದೆನು. ನಾನು ಕೋಪಗೊಂಡು ಅವರಿಗೆ
ವಿಮುಖನಾದೆನು. ಇಸ್ರೇಲ್ ನನ್ನನ್ನು ತೊರೆದು
ತನಗಿಷ್ಟವಾದ ಸ್ಥಳಕ್ಕೆ* ಹೋದನು.
18 ಇಸ್ರೇಲ್ ಎಲ್ಲಿಗೆ ಹೋದನೆಂದು ನಾನು ನೋಡಿ
ದೆನು. ನಾನು ಅವನನ್ನು ಕ್ಷಮಿಸುವೆನು. ಅವನನ್ನು
ಆದರಿಸುವೆನು. ಒಳ್ಳೆಯ ಮಾತುಗಳಿಂದ ಅವನನ್ನು
ರಮಿಸುವೆನು. ಆಗ ಅವನೂ ಅವನ ಜನರೂ
ವ್ಯಸನಪಡುವದಿಲ್ಲ.
19 ನಾನು ಅವರಿಗೆ''ಸಮಾಧಾನ''ಎಂಬ ಹೊಸ ಪದ
ವನ್ನು ಕಲಿಸುತ್ತೇನೆ. ನನ್ನ ಬಳಿಯಲ್ಲಿರುವವರಿಗೂ
ನನ್ನಿಂದ ದೂರದಲ್ಲಿರುವವರಿಗೂ ಸಮಾಧಾನ
ವನ್ನು ಅನುಗ್ರಹಿಸುವೆನು. ನಾನು ಅವರನ್ನು ಗುಣ
ಪಡಿಸುವೆನು'' ಇದು ಯೆಹೋವನ ನುಡಿ.

20 ದುಷ್ಟ ಜನರು ರೊಚ್ಚಿಗೆದ್ದ ಸಾಗರದಂತೆ ಸಮಾಧಾನ
ದಲ್ಲಿಯೂ ಮೌನದಿಂದಲೂ ಇರಲಾರರು. ಅವರು
ಸಿಟ್ಟುಗೊಂಡು ಸಮುದ್ರದಂತೆ ಕೆಸರನ್ನು ಕದಡಿಸುವರು.
ನನ್ನ ದೇವರು ಹೇಳುವದೇನೆಂದರೆ: 21 ''ದುಷ್ಟ ಜನರಿಗೆ
ಸಮಾಧಾನವಿಲ್ಲ.''

### ದೇವರನ್ನು ಅನುಸರಿಸಲು ಜನರಿಗೆ ಉಪದೇಶ

58 ಎಷ್ಟು ಗಟ್ಟಿಯಾಗಿ ಆರ್ಭಟಿಸಬಹುದೋ
ಅಷ್ಟು ಆರ್ಭಟಿಸಿರಿ. ನಿಲ್ಲಿಸಬೇಡಿರಿ,
ತೂತ್ತೂರಿಯಂತೆ ಗಟ್ಟಿಯಾಗಿ ಕಿರುಚಿರಿ. ಜನರು
ಮಾಡಿದ ಪಾಪಗಳನ್ನು ಅವರಿಗೆ ತಿಳಿಸಿರಿ. ಯಾಕೋ
ಬನ ವಂಶದವರಿಗೆ ಅವರ ಪಾಪಗಳನ್ನು ತಿಳಿಸಿರಿ.
2 ಆಗ ಅವರು ದಿನನಿತ್ಯ ನನ್ನನ್ನು ಆರಾಧಿಸಲು ಬರು
ವರು. ಜನರು ನನ್ನ ವಿಧಿಗಳನ್ನು ಕಲಿತುಕೊಳ್ಳಲು
ಇಷ್ಟಪಡುವರು. ಆಗ ಅವರು ಸರಿಯಾಗಿ ಜೀವಿ
ಸುವ ಜನಾಂಗವಾಗುವರು. ಅವರು ದೇವರ
ಒಳ್ಳೆಯ ಆಜ್ಞೆಗಳನ್ನು ಬಿಡದೆ ಅನುಸರಿಸುವರು.
ಅವರು ಪಕ್ಷಪಾತವಿಲ್ಲದೆ ನ್ಯಾಯತೀರಿಸಲು
ನನ್ನನ್ನು ಕೇಳುವರು. ದೇವರ ನಿರ್ಧಾರವನ್ನು
ಕೇಳಲು ಆತನ ಬಳಿಗೆ ಹೋಗಲು ಇಚ್ಛಿಸುವರು.

3 ಈಗ ಆ ಜನರು ಹೀಗೆ ಹೇಳುತ್ತಾರೆ, ''ನಾವು ನಿನ್ನನ್ನು
ಗೌರವಿಸಲು ಉಪವಾಸಮಾಡಿದೆವು. ನೀನು ನಮ್ಮನ್ನೇಕೆ
ಗಮನಿಸುವದಿಲ್ಲ? ನಿನ್ನನ್ನು ಗೌರವಿಸುವದಕ್ಕಾಗಿ ನಾವು
ನಮ್ಮ ದೇಹಗಳನ್ನು ದಂಡಿಸಿದೆವು. ನೀನೇಕೆ ನಮ್ಮನ್ನು
ಗಮನಿಸುವದಿಲ್ಲ?''

---

**ತನಗಿಷ್ಟವಾದ ಸ್ಥಳಕ್ಕೆ** ಅಕ್ಷರಶಃ ದಂಗೆಕೋರತನದ ರೀತಿಯಲ್ಲಿ ತನಗಿಷ್ಟಬಂದಂತೆ ಮಾಡಿದನು.

ಆದರೆ ಯೆಹೋವನು ಹೇಳುವದೇನೆಂದರೆ: ‘‘ವಿಶೇಷ
ದಿವಸಗಳಲ್ಲಿ ನಿಮ್ಮ ಇಷ್ಟಾನುಸಾರ * ಉಪವಾಸ ಮಾಡು
ವಿರಿ. ನೀವು ನಿಮ್ಮ ಸ್ವಂತ ದೇಹಗಳನ್ನು ದಂಡಿಸದೆ ನಿಮ್ಮ
ಸೇವಕರನ್ನು ದಂಡಿಸುತ್ತಿದ್ದೀರಿ. [4]ನೀವು ಆಹಾರಕ್ಕಾಗಿ
ಹಸಿವೆಯಿಂದಿಲ್ಲ. ನೀವು ಜಗಳ, ವಾಗ್ವಾದಕ್ಕಾಗಿ ಹಸಿದಿ
ದ್ದೀರಿ. ನಿಮ್ಮ ಕ್ರೂರ ಕೈಗಳಿಂದ ಜನರನ್ನು ಹೊಡೆಯಲು
ಹಸಿವೆಯಿಂದಿದ್ದೀರಿ. ನೀವು ಉಪವಾಸ ಮಾಡುವಾಗ
ನನಗಾಗಿ ಮಾಡುವದಿಲ್ಲ. ನನ್ನನ್ನು ಸ್ತುತಿಸಲು ನೀವು ನಿಮ್ಮ
ಸ್ವರವನ್ನು ಉಪಯೋಗಿಸುವದಿಲ್ಲ. [5]ಉಪವಾಸದ ದಿವಸ
ಗಳಲ್ಲಿ ಜನರು ತಮ್ಮ ದೇಹದಂಡನೆ ಮಾಡುವದನ್ನು
ನೋಡಲು ಆಶಿಸುತ್ತೇನೆ ಎಂದು ನೆನೆಸಿರುವಿರಾ? ಜನರು
ತಮ್ಮ ಮುಖವನ್ನು ಸಪ್ಪಗೆ ಮಾಡಿಕೊಳ್ಳಬೇಕೆಂದು ನಾನು
ಆಶಿಸುವುದಾಗಿ ನೀವು ತಿಳಿದುಕೊಂಡಿದ್ದೀರಾ? ಜನರು
ಸತ್ತ ಸಸಿಗಳಂತೆ ನನಗೆ ಅಡ್ಡಬೀಳಬೇಕೆಂದೂ ಶೋಕವಸ್ತ್ರ
ಗಳನ್ನು ಧರಿಸಬೇಕೊಂದೂ ನಾನು ಆಶಿಸುವುದಾಗಿ
ತಿಳಿದುಕೊಂಡಿದ್ದೀರಾ? ಅವರು ಬೂದಿಯ ಮೇಲೆ
ಕುಳಿತುಕೊಂಡು ತಮ್ಮ ದುಃಖವನ್ನು ವ್ಯಕ್ತಪಡಿಸ
ಬೇಕೆಂದು ನಾನು ಆಶಿಸುತ್ತೇನೋ? ನೀವು ಉಪವಾಸದ
ದಿವಸಗಳಲ್ಲಿ ಅದನ್ನೇ ಮಾಡುವವರಾಗಿರುತ್ತೀರಿ.
ಯೆಹೋವನು ಅದನ್ನೇ ಆಶಿಸುವನೆಂದು
ನಂಬುತ್ತೀರೋ?

[6]‘‘ನನಗೆ ಬೇಕಾಗಿರುವ ವಿಶೇಷ ದಿವಸ ಯಾವದೆಂದು
ನಾನು ಹೇಳುತ್ತೇನೆ. ಅದು ಜನರನ್ನು ಸ್ವತಂತ್ರರನ್ನಾಗಿ
ಮಾಡುವ ದಿವಸ, ಜನರಿಂದ ಅವರ ಭಾರವನ್ನು ತೆಗೆದು
ಹಾಕುವ ದಿವಸ; ತೊಂದರೆಗೀಡಾಗಿರುವ ಜನರನ್ನು
ವಿಮುಕ್ತರನ್ನಾಗಿ ಮಾಡುವ ದಿವಸ; ಅವರ ಹೆಗಲಿನಿಂದ
ಭಾರದ ಹೊರೆಯನ್ನು ಇಳಿಸುವ ದಿವಸ. [7]ನೀವು ನಿಮ್ಮ
ಊಟವನ್ನು ಹಸಿದವರೊಂದಿಗೆ ಹಂಚಿಕೊಳ್ಳುವದನ್ನು
ನಾನು ನೋಡಲು ಆಶಿಸುತ್ತೇನೆ. ಮನೆಗಳಿಲ್ಲದ ಬಡ
ಜನರನ್ನು ಕಂಡುಹಿಡಿದು ಅವರನ್ನು ನಿಮ್ಮ ಮನೆಗಳಿಗೆ
ಕರೆದುಕೊಂಡು ಬರುವದನ್ನು ನೋಡಲು ಆಶಿಸುತ್ತೇನೆ.
ಬಟ್ಟೆ ಇಲ್ಲದ ಒಬ್ಬ ಮನುಷ್ಯನನ್ನು ನೋಡಿದರೆ ನೀವು
ನಿಮ್ಮ ಬಟ್ಟೆಯನ್ನು ಅವನಿಗೆ ಕೊಡಿರಿ. ಅವರಿಗೆ ಸಹಾಯ
ಮಾಡಲು ಹಿಂಜರಿಯಬೇಡಿರಿ. ಅವರು ನಿಮ್ಮಂತೆ
ಮಾನವರಲ್ಲವೋ?’’

[8]ನೀವು ಹೀಗೆ ಮಾಡಿದ್ದಲ್ಲಿ ನೀವು ಬೆಳಕಿನಂತೆ
ಪ್ರಕಾಶಿಸುವಿರಿ. ಆಗ ನಿಮ್ಮ ಗಾಯಗಳು ಗುಣವಾಗು
ವವು. ನಿಮ್ಮ ಒಳಿಯತನವು (ದೇವರು) ನಿಮ್ಮ ಮುಂದೆ
ನಡೆಯುವುದು. ಯೆಹೋವನ ಮಹಿಮೆಯು ನಿಮ್ಮ
ಹಿಂದಿನಿಂದ ನಿಮ್ಮನ್ನು ಹಿಂಬಾಲಿಸುವದು. [9]ಆಗ ನೀವು
ಯೆಹೋವನನ್ನು ಕರೆದಾಗ ಆತನು ನಿಮಗೆ ಉತ್ತರಿಸು
ವನು. ನೀವು ಆತನನ್ನು ಕೂಗಿದಾಗ, ‘‘ಇಗೋ,
ನಾನಿದ್ದೇನೆ’’ ಎಂದು ಅನ್ನುವನು.

### ದೇವಜನರು ಯೋಗ್ಯವಾದದ್ದನ್ನೇ ಮಾಡಬೇಕು

ನೀವು ಜನರಿಗೆ ಕಷ್ಟಕೊಡುವದನ್ನೂ ಅವರಿಗೆ ಬಾರ
ಹೊರಿಸುವದನ್ನೂ ನಿಲ್ಲಿಸಬೇಕು. ಜನರಿಗೆ ಕಟುವಾಗಿ
ಮಾತನಾಡಿ ಅವರನ್ನು ಬಯ್ಯುವದನ್ನು ನಿಲ್ಲಿಸಬೇಕು.
[10]ಹಸಿದ ಜನರಿಗಾಗಿ ವ್ಯಸನಪಟ್ಟು ಅವರಿಗೆ ಆಹಾರವನ್ನು
ಕೊಡಬೇಕು. ಸಂಕಷ್ಟ ಅನುಭವಿಸುವ ಜನರಿಗೆ ಸಹಾಯ
ಮಾಡಿ ಅವರ ಕೊರತೆಗಳನ್ನು ನೀಗಿಸಬೇಕು. ಆಗ ನಿಮ್ಮ
ಬೆಳಕು ಕತ್ತಲಲ್ಲಿ ಪ್ರಕಾಶಿಸುವದು. ನಿಮಗೆ ಆಗ ದುಃಖ
ವಿರದು. ಮಧ್ಯಾಹ್ನದ ಸೂರ್ಯನಂತೆ ನೀವು
ಹೊಳೆಯುವಿರಿ.

[11]ಯೆಹೋವನು ಯಾವಾಗಲೂ ನಿಮ್ಮನ್ನು ನಡೆಸು
ವನು. ಒಣನೆಲದಲ್ಲಿ ನಿಮ್ಮ ಆತ್ಮಗಳನ್ನು ತೃಪ್ತಿಪಡಿಸುವನು.
ನಿಮ್ಮ ಎಲುಬುಗಳಿಗೆ ಬಲವನ್ನು ಕೊಡುವನು. ನೀರಿ
ನಿಂದ ತೇವವಾಗಿರುವ ತೋಟದಂತೆ ನೀವು ಇರುವಿರಿ.
ನಿತ್ಯವೂ ನೀರಿರುವ ಬುಗ್ಗೆಯಂತೆ ನೀವಿರುವಿರಿ.

[12]ಬಹಳ ವರುಷಗಳಿಂದ ನಿಮ್ಮ ಪಟ್ಟಣಗಳು ಹಾಳಾಗಿ
ಬಿದ್ದಿವೆ. ಆದರೆ ಹೊಸ ಪಟ್ಟಣಗಳು ಏಳುವವು. ಅವುಗಳ
ಅಸ್ತಿವಾರಗಳು ಬಹಳ ವರ್ಷ ಬಾಳುವವು. ನೀವು ‘‘ಬೇಲಿ
ಸರಿಮಾಡುವವರು’’ ಎಂದು ಕರೆಯಲ್ಪಡುವಿರಿ ಮನೆಗ
ಳನ್ನು, ರಸ್ತೆಗಳನ್ನು ನಿರ್ಮಿಸುವವರೆಂದು ನೀವು ಕರೆಯ
ಲ್ಪಡುವಿರಿ.

[13]ಸಬ್ಬತಿನ ಸಂಬಂಧವಾಗಿ ಯೆಹೋವನು ನಿಮಗೆ
ಕೊಟ್ಟಿರುವ ಆಜ್ಞೆಗಳನ್ನು ನೀವು ಅನುಸರಿಸಿದರೆ ಮತ್ತು
ಆ ವಿಶೇಷ ಈ ದಿನದಲ್ಲಿ ಸ್ವೇಚ್ಛೆಯಾಗಿ ನಡೆಯದಿದ್ದರೆ
ಇದೆಲ್ಲಾ ನಿಮಗೆ ದೊರೆಯುವುದು. ಸಬ್ಬತ್ ದಿವಸವನ್ನು
ನೀವು ಸಂತಸದ ದಿವಸವೆಂದು ಕರೆಯಬೇಕು. ದೇವರ
ಆ ವಿಶೇಷ ದಿವಸವನ್ನು ನೀವು ಸನ್ಮಾನಿಸಿ ಆ ದಿವಸದಲ್ಲಿ
ನಿಮ್ಮ ಸ್ವಕಾರ್ಯಗಳನ್ನು ಮಾಡಕೂಡದು; ಹರಟೆ
ಹೊಡೆಯ ಕೂಡದು.

[14] ಆಗ ನೀವು ಯೆಹೋವನಲ್ಲಿ ಉಲ್ಲಾಸಿಸುವಿರಿ.
ಆತನು ನಿಮ್ಮನ್ನು ಭೂಮಿಯಿಂದ ಮೇಲಕ್ಕಿರುವ
ಉನ್ನತಸ್ಥಾನಕ್ಕೆ ಕೊಂಡೊಯ್ಯುವನು; ನಿಮ್ಮ
ಪೂರ್ವಿಕನಾದ ಯಾಕೋಬನಿಗೆ ಸಂಬಂಧಿಸಿದ
ಎಲ್ಲಾ ಸಂಗತಿಗಳನ್ನು ಆತನು ನಿಮಗೆ ಕೊಡುವನು.
ಇದು ಯೆಹೋವನ ನುಡಿ.

---

**ಇಷ್ಟಾನುಸಾರ** ಬಹುಶಃ ಜನರು ಉಪವಾಸ ಆಚರಣೆ ಮಾಡುವುದರ ಬದಲು ವ್ಯಾಪಾರವನ್ನೂ ಮಾಡುತ್ತಿದ್ದಿರಬೇಕು.

## ದುಷ್ಟರು ತಮ್ಮ ಜೀವಿತವನ್ನು ಬದಲಾಯಿಸಬೇಕು

59 ನಿನ್ನನ್ನು ರಕ್ಷಿಸಲು ಯೆಹೋವನು ಶಕ್ತನಾಗಿ
ದ್ದಾನೆ. ನೀನು ಸಹಾಯಕ್ಕಾಗಿ ಪ್ರಾರ್ಥಿಸುವಾಗ
ಆತನು ನಿನ್ನನ್ನು ಆಲೈಸುವನು. [2]ಆದರೆ ನಿನ್ನ ಪಾಪಗಳೇ
ನಿನ್ನನ್ನು ದೇವರಿಂದ ದೂರ ಮಾಡಿರುತ್ತವೆ. ಯೆಹೋ
ವನು ತನ್ನ ಮುಖವನ್ನು ಮರೆಮಾಡಿಕೊಳ್ಳುವಂತೆ ನಿಮ್ಮ
ಪಾಪಗಳು ಮಾಡಿದ್ದರಿಂದ, ಆತನು ನಿಮಗೆ ಕಿವಿ
ಗೊಡುವುದಿಲ್ಲ.

[3]ನಿಮ್ಮ ಕೈಗಳು ಮಲಿನವಾಗಿವೆ; ಅವು ರಕ್ತಮಯ
ವಾಗಿವೆ. ನಿಮ್ಮ ಬೆರಳುಗಳನ್ನು ಅಪರಾಧಗಳು ಮುಚ್ಚಿವೆ.
ನಿಮ್ಮ ಬಾಯಿಗಳಿಂದ ನೀವು ಸುಳ್ಳಾಡುತ್ತೀರಿ. ನಿಮ್ಮ
ನಾಲಿಗೆಯು ಕೆಟ್ಟಮಾತುಗಳನ್ನಾಡುತ್ತದೆ. [4]ನೆರೆಯವನ
ಬಗ್ಗೆ ಯಾರೂ ಸತ್ಯವನ್ನಾಡುವದಿಲ್ಲ. ಜನರು ನ್ಯಾಯಾಲ
ಯಗಳಲ್ಲಿ ಪರಸ್ಪರ ವ್ಯಾಜ್ಯಮಾಡುವರು. ತಾವು ಗೆಲ್ಲ
ಬೇಕೆಂಬ ಉದ್ದೇಶದಿಂದ ಸುಳ್ಳುಸಾಕ್ಷಿಯ ಮೇಲೆ
ಅವಲಂಬಿಸುವರು. ಅವರು ಒಬ್ಬರ ಮೇಲೊಬ್ಬರು ಸುಳ್ಳು
ಹೇಳುತ್ತಾರೆ; ಅವರು ಕೇಡಿನಿಂದ ತುಂಬಿದವರಾಗಿದ್ದು
ಕೇಡನ್ನೇ ಹೆರುತ್ತಾರೆ. [5]ವಿಷದ ಹಾವಿನ ಮೊಟ್ಟೆಯಿಂದ
ವಿಷದ ಹಾವಿನಮರಿಗಳು ಹೊರಬರುವಂತೆ ಅವರ ದುಷ್ಟ
ತನವು ಹೊರಬರುವದು. ಒಂದು ಮೊಟ್ಟೆಯನ್ನು ನೀವು
ತಿಂದರೆ ಸಾಯುವಿರಿ. ಆ ಮೊಟ್ಟೆಯನ್ನು ಒಡೆದರೆ ವಿಷದ
ಹಾವು ಹೊರಬರುವದು.

ಜನರು ಹೇಳುವ ಸುಳ್ಳು ಜೇಡರ ಬಲೆಯಂತಿರುವದು.
[6]ಜೇಡರಬಲೆಗಳ ನೂಲಿನಿಂದ ಬಟ್ಟೆನೇಯಲಾಗದು. ಆ
ಬಲೆಯಿಂದ ನಿಮ್ಮ ಶರೀರವನ್ನು ಮುಚ್ಚಲಾಗುವದಿಲ್ಲ.
ಕೆಲವರು ತಮ್ಮ ಕೈಗಳಿಂದ ಇತರರಿಗೆ ಕೇಡುಮಾಡುವರು.
[7]ಅವರು ತಮ್ಮ ಕಾಲುಗಳಿಂದ ಓಡುತ್ತಾ ದುಷ್ಟಕಾರ್ಯ
ಗಳನ್ನು ಮಾಡುವರು; ನಿರಪರಾಧಿಗಳನ್ನು ಕೊಲ್ಲಲು
ಆತುರಪಡುವರು. ಅವರ ಆಲೋಚನೆಯು ಕೆಟ್ಟದ್ದೇ
ದೊಂಬಿ, ಲೂಟಿಗಳೇ ಅವರ ಜೀವನಶೈಲಿಯಾಗಿವೆ.

[8]ಅವರಿಗೆ ಸಮಾಧಾನದ ದಾರಿಯೇ ತಿಳಿಯದು. ಅವರ
ಜೀವಿತದಲ್ಲಿ ಒಳ್ಳೆಯತನವೆಂಬುದು ಇಲ್ಲ. ಅವರ
ಮಾರ್ಗವು ಕಪಟತನದಿಂದ ತುಂಬಿದೆ. ಅವರಂತೆ ಜೀವಿಸು
ವವರಿಗೆ ಶಾಂತಿಯೇ ಇರದು.

## ಇಸ್ರೇಲರ ಪಾಪವೇ ಸಂಕಟಕ್ಕೆ ಕಾರಣ

9 ಎಲ್ಲಾ ನ್ಯಾಯನೀತಿಗಳು ಇಲ್ಲವಾಗಿವೆ. ನಮ್ಮ
ಬಳಿಯಲ್ಲಿ ಅಂಧಕಾರವು ಇರುವದರಿಂದ ನಾವು
ಬೆಳಕಿಗಾಗಿ ಕಾಯಬೇಕಾಗಿದೆ. ಪ್ರಕಾಶಮಾನ
ವಾದ ಬೆಳಕಿಗಾಗಿ ಆಶಿಸುತ್ತಿರುವಾಗ ನಮಗೆ ಸಿಕ್ಕಿದ್ದು
ಕೇವಲ ಕತ್ತಲೆಯೇ.

10 ನಾವು ಕಣ್ಣಿಲ್ಲದವರಂತಿದ್ದೇವೆ. ಕುರುಡರಂತೆ
ಗೋಡೆಗೆ ತಾಕುತ್ತಿದ್ದೇವೆ. ರಾತ್ರಿಯಲ್ಲಿ ಎಡವಿ
ಬೀಳುವಂತೆ ಬೀಳುತ್ತಿದ್ದೇವೆ. ಹಗಲಿನಲ್ಲಿಯೂ
ನಮಗೆ ಕಾಣದು. ಮಧ್ಯಾಹ್ನದ ಸಮಯದಲ್ಲೂ
ಸತ್ತವರಂತೆ ಬೀಳುತ್ತೇವೆ.

11 ನಾವೆಲ್ಲಾ ದುಃಖಿತರಾಗಿರುತ್ತೇವೆ. ನಾವು ದುಃಖ
ದಿಂದ ಪಾರಿವಾಳಗಳಂತೆಯೂ ಕರಡಿಗ ಳಂತೆಯೂ
ಮೂಲುಗುತ್ತಿದ್ದೇವೆ. ಜನರು ಧರ್ಮವನ್ನು ಅನುಸ
ರಿಸುವ ಸಮಯಕ್ಕಾಗಿ ನಾವು ಕಾಯುತ್ತಿದ್ದೇವೆ.
ಆದರೆ ಧರ್ಮವೇ ಇಲ್ಲ. ನಾವು ರಕ್ಷಣೆಗಾಗಿ
ಕಾಯುತ್ತಿದ್ದೇವೆ. ಆದರೆ ರಕ್ಷಣೆಯು ಬಹುದೂರ
ವಿದೆ.

12 ಯಾಕೆಂದರೆ ನಾವು ಲೆಕ್ಕವಿಲ್ಲದಷ್ಟು ದ್ರೋಹ
ಗಳನ್ನು ದೇವರಿಗೆ ವಿರುದ್ಧವಾಗಿ ಮಾಡಿರುತ್ತೇವೆ.
ನಾವು ಮಾಡಿದ್ದು ತಪ್ಪೆಂದು ನಮ್ಮ ಪಾಪಗಳೇ
ತೋರಿಸುತ್ತವೆ. ಹೌದು, ನಾವು ಈ ಕಾರ್ಯಗಳನ್ನು
ಮಾಡಿ ದೋಷಿಗಳಾಗಿದ್ದೇವೆ.

13 ನಾವು ಪಾಪಮಾಡಿ ಯೆಹೋವನಿಂದ ದೂರ
ಹೋಗಿದ್ದೇವೆ. ಆತನಿಂದ ದೂರವಾಗಿ ಆತನನ್ನು
ತೊರೆದುಬಿಟ್ಟಿದ್ದೇವೆ. ನಾವು ದುಷ್ಟತನವನ್ನೂ
ದೇವ ರಿಗೆ ವಿರುದ್ಧವಾದ ಕಾರ್ಯಗಳನ್ನೂ
ಆಲೋಚಿಸಿ ದ್ದೇವೆ. ನಮ್ಮ ಹೃದಯಗಳಲ್ಲಿ
ದುಷ್ಟಯೋಜನೆ ಗಳನ್ನು ಹಾಕಿರುತ್ತೇವೆ.

14 ನ್ಯಾಯವು ನಮ್ಮಿಂದ ತೊಲಗಿಹೋಗಿದೆ. ಸತ್ಯವು
ಬೀದಿಪಾಲಾಗಿದೆ. ನೀತಿಯು ಪಟ್ಟಣದೊಳಕ್ಕೆ
ಪ್ರವೇಶಿಸಲೂ ಇಲ್ಲ.

15 ಸತ್ಯವು ಹೊರಟು ಹೋಯಿತು. ಒಳ್ಳೆಯದನ್ನು
ಮಾಡುವವರು ಲೂಟಿಗೆ ಗುರಿಯಾಗಿದ್ದಾರೆ.
ಒಳ್ಳೆಯವರು ಇಲ್ಲದೆ ಇರುವುದನ್ನು ಕಂಡು
ಯೆಹೋವನು ಬೇಸರಗೊಂಡಿದ್ದಾನೆ.

16 ಜನರಿಗೆ ಸಹಾಯ ಮಾಡುವವರು ಇಲ್ಲದೆ ಇರುವು
ದನ್ನು ಕಂಡು ಯೆಹೋವನು ಆಶ್ಚರ್ಯಚಕಿತ
ನಾಗಿದ್ದಾನೆ. ಆದುದರಿಂದ ಯೆಹೋವನು ತನ್ನ
ಸ್ವಂತ ಶಕ್ತಿಯನ್ನೂ ನೀತಿಯನ್ನೂ ಬಳಸಿ ಜನರನ್ನು
ರಕ್ಷಿಸಿದನು.

17 ಯೆಹೋವನು ಯುದ್ಧ ಸನ್ನದ್ಧನಾದನು. ಆತನು
ಒಳ್ಳೆಯತನವೆಂಬ ಕವಚ, ರಕ್ಷಣೆಯೆಂಬ ಶಿರ
ಸ್ತ್ರಾಣ, ಶಿಕ್ಷೆಯೆಂಬ ಬಟ್ಟೆ ಮತ್ತು ಗಾಢವಾದ
ಪ್ರೇಮವೆಂಬ ಮೇಲ್ಹೊದಿಕೆಯನ್ನು ಧರಿಸಿದ್ದಾನೆ.

18 ಯೆಹೋವನು ತನ್ನ ಶತ್ರುಗಳ ಮೇಲೆ ಕೋಪ
ಗೊಂಡಿರುವುದರಿಂದ ಅವರಿಗೆ ಸರಿಯಾದ
ದಂಡನೆಯನ್ನು ಕೊಡುವನು; ಯೆಹೋವನು ತನ್ನ

ಶತ್ರುಗಳ ಮೇಲೆ ಕೋಪಗೊಂಡಿರುವುದರಿಂದ
ದೂರದೇಶಗಳಲ್ಲಿರುವ ಜನರನ್ನೆಲ್ಲಾ ಸರಿಯಾಗಿ
ದಂಡಿಸುವನು.
19 ಆಗ ಪಶ್ಚಿಮದಲ್ಲಿರುವ ಜನರು ಯೆಹೋವನ
ನಾಮಕ್ಕೆ ಭಯಪಟ್ಟು ಗೌರವಿಸುವರು. ಪೂರ್ವದ
ಲ್ಲಿದ್ದ ಜನರು ಆತನ ಮಹಿಮೆಯನ್ನು ಭಯಭಕ್ತಿ
ಯಿಂದ ಕಾಣುವರು. ಬಿರುಗಾಳಿಯಿಂದ ರಭಸ
ವಾಗಿ ಹರಿದುಬರುವ ಹೊಳೆಯಂತೆ ಯೆಹೋವನು
ಬೇಗನೆ ಬರುವನು.
20 ಆಗ ಒಬ್ಬ ರಕ್ಷಕನು ಚೀಯೋನಿಗೆ ಬರುವನು.
ಜನರು ಪಾಪಮಾಡಿದ್ದರೂ ದೇವರ ಬಳಿಗೆ ಹಿಂತಿ
ರುಗಿ ಬಂದ ಯಾಕೋಬನ ಜನರ ಬಳಿಗೆ ಆತನು
ಬರುವನು.

21 ಯೆಹೋವನು ಹೇಳುವದೇನೆಂದರೆ: ‘‘ನಾನು ಆ
ಜನರೊಂದಿಗೆ ಒಂದು ಒಡಂಬಡಿಕೆಯನ್ನು ಮಾಡು
ವೆನು. ನನ್ನ ವಾಗ್ದಾನದ ಮಾತುಗಳೂ ನಾನು ಇರಿಸಿದ
ನನ್ನ ಆತ್ಮವೂ ನಿನ್ನಿಂದ ಎಂದಿಗೂ ತೊಲಗದು. ಅವು ನಿನ್ನ
ಮೊಮ್ಮಕ್ಕಳ ತನಕವೂ ಇರುವವು. ಅವು ನಿನ್ನೊಂದಿಗೆ
ಈಗಲೂ ಸದಾಕಾಲವೂ ಇರುವವು.’’

### ದೇವರ ಆಗಮನ

60 ‘‘ಜೇರಸಲೇಮೇ, ನನ್ನ ಪ್ರಕಾಶವೇ,
ಎದ್ದೇಳು. ನಿನ್ನ ಪ್ರಕಾಶವೆಂಬಾತನು ಬರು
ತ್ತಾನೆ. ಆತನ ಮಹಿಮೆಯು ನಿನ್ನ ಮೇಲೆ
ಪ್ರಕಾಶಿಸುವುದು.
2 ಕತ್ತಲೆಯು ಈಗ ಭೂಮಿಯನ್ನು ಕವಿದಿದೆ. ಜನರು
ಕತ್ತಲೆಯಲ್ಲಿದ್ದಾರೆ. ಆದರೆ ಯೆಹೋವನ ಪ್ರಕಾ
ಶವು ನಿನ್ನ ಮೇಲಿರುವದು. ಆತನ ಮಹಿಮೆಯು
ನಿನ್ನ ಮೇಲೆ ಬರುವದು.
3 ಜನಾಂಗಗಳು ನಿನ್ನ ಬೆಳಕಿನ ಕಡೆಗೆ ಬರುವರು.
ಅರಸರುಗಳು ನಿನ್ನ ಪ್ರಕಾಶಮಾನವಾದ ಬೆಳಕಿನತ್ತ
ಬರುವರು.
4 ನಿನ್ನ ಸುತ್ತಲೂ ನೋಡು. ಜನರು ಸುತ್ತಲೂ ನಿನ್ನ
ಬಳಿಗೆ ಬಂದು ಸೇರುವದನ್ನು ನೋಡು. ಅವರು
ದೂರ ಪ್ರಾಂತ್ಯದಿಂದ ಬರುವ ನಿನ್ನ ಗಂಡುಮಕ್ಕಳಾ
ಗಿದ್ದಾರೆ. ನಿನ್ನ ಕುಮಾರಿಯರು ಅವರೊಂದಿಗೆ
ಬರುತ್ತಿದ್ದಾರೆ.
5 ಇವು ಮುಂದೆ ಸಂಭವಿಸುತ್ತವೆ. ಆಗ ನೀನು ನಿನ್ನ
ಜನರನ್ನು ನೋಡುವೆ. ನಿನ್ನ ಮುಖವು ಸಂತೋಷ
ದಿಂದ ಪ್ರಕಾಶಿಸುವದು. ಮೊದಲು ನೀನು
ಭಯಪಡುವೆ. ಆ ಬಳಿಕ ನೀನು ಉತ್ಸಾಹಪಡುವೆ.
ಸಮುದ್ರದಾಚೆ ಇರುವ ಐಶ್ವರ್ಯವು ನಿನ್ನ ಮುಂದೆ
ರಾಶಿ ಹಾಕಲ್ಪಡುವದು. ಜನಾಂಗಗಳ ನಿಕ್ಷೇಪವು
ನಿನಗೆ ದೊರೆಯುವುದು.
6 ಮಿದ್ಯಾನಿನ ಮತ್ತು ಏಫದ ಒಂಟೆಗಳ ಹಿಂಡು ರಾಜ್ಯ
ವನ್ನು ದಾಟುವವು. ಶೆಬ ರಾಜ್ಯದ ಒಂಟೆಗಳ ಸಾಲು
ಚಿನ್ನ ಮತ್ತು ಧೂಪವನ್ನು ಹೊತ್ತುಕೊಂಡು ನಿನ್ನ
ಬಳಿಗೆ ಬರುವವು. ಜನರು ಯೆಹೋವನಿಗೆ ಸ್ತೋತ್ರ
ಗಾನ ಹಾಡುವರು.
7 ಜನರು ಕೇದಾರಿನ ಎಲ್ಲಾ ಕುರಿಗಳನ್ನು ಒಟ್ಟು
ಗೂಡಿಸಿ ನಿನಗೆ ಕೊಡುವರು. ನೆಬಾಯೋತಿನಿಂದ
ಟಗರುಗಳನ್ನು ನಿನಗೆ ತರುವರು. ನೀನು ನಿನ್ನ
ವೇದಿಕೆಯ ಮೇಲೆ ಅವುಗಳನ್ನು ಯಜ್ಞಮಾಡುವೆ.
ಆಗ ನಾನು ಸ್ವೀಕರಿಸುವೆನು. ನನ್ನ ಸುಂದರವಾದ
ಆಲಯವನ್ನು ಇನ್ನೂ ಸೌಂದರ್ಯಗೊಳಿಸುವೆನು.
8 ಜನರನ್ನು ನೋಡು! ಆಕಾಶದ ಮೋಡವು ಹಾರಿ
ಹೋಗುವಂತೆ ಅವರು ನಿನ್ನ ಬಳಿಗೆ ತ್ವರಿತವಾಗಿ
ಬರುತ್ತಿದ್ದಾರೆ. ತಮ್ಮ ಗೂಡುಗಳಿಗೆ ಹಾರುವ ಪಾರಿ
ವಾಳಗಳಂತೆ ಅವರಿರುತ್ತಾರೆ.
9 ದೂರ ಪ್ರಾಂತ್ಯಗಳು ನನಗಾಗಿ ಕಾದಿವೆ. ದೊಡ್ಡ
ಸರಕು ಸಾಗಿಸುವ ಹಡಗುಗಳು ಹೊರಡಲು ತಯಾ
ರಾಗಿವೆ. ಈ ಹಡಗುಗಳು ದೂರ ಪ್ರಾಂತ್ಯದಲ್ಲಿರುವ
ನಿನ್ನ ಮಕ್ಕಳನ್ನು ಕರೆತರಲು ತಯಾರಾಗಿವೆ. ಅವರು
ಬೆಳ್ಳಿಬಂಗಾರಗಳನ್ನು ತಮ್ಮೊಂದಿಗೆ ತಂದು ಇಸ್ರೇ
ಲಿನ ಪರಿಶುದ್ಧನಾದ ಯೆಹೋವನನ್ನು ಘನ
ಪಡಿಸುವರು. ಯೆಹೋವನು ನಿನಗೆ ಆಶ್ಚರ್ಯಕರ
ವಾದ ಸಂಗತಿಗಳನ್ನು ಮಾಡುವನು.
10 ಬೇರೆ ದೇಶದ ಮಕ್ಕಳು ನಿನ್ನ ಗೋಡೆಗಳನ್ನು ಮತ್ತೆ
ಕಟ್ಟುವರು. ಅವರ ಅರಸರುಗಳು ನಿನ್ನ ಸೇವೆ
ಮಾಡುವರು. ನಾನು ಕೋಪಗೊಂಡಾಗ ನಿನ್ನನ್ನು
ಬಾಧಿಸಿದೆನು. ಆದರೆ ಈಗ ನಿನಗೆ ಕರುಣೆ
ತೋರುವೆನು. ನಿನ್ನನ್ನು ಆದರಿಸುವೆನು.
11 ನಿನ್ನ ದ್ವಾರಗಳು ಯಾವಾಗಲೂ ತೆರೆಯಲ್ಪಡುತ್ತವೆ.
ಅವು ಹಗಲಲ್ಲಾಗಲೀ ರಾತ್ರಿಯಲ್ಲಾಗಲೀ ಮುಚ್ಚ
ಲ್ಪಡುವದಿಲ್ಲ. ರಾಜ್ಯಗಳೂ ರಾಜರುಗಳೂ ತಮ್ಮ
ಐಶ್ವರ್ಯವನ್ನು ನಿನ್ನ ಬಳಿಗೆ ತರುವರು.
12 ನಿನ್ನ ಸೇವೆ ಮಾಡದ ಯಾವ ರಾಜ್ಯವಾಗಲೀ ನಾಶ
ಮಾಡಲ್ಪಡುವದು.
13 ಲೆಬನೋನಿನ ಎಲ್ಲಾ ಅಮೂಲ್ಯ ವಸ್ತುಗಳನ್ನು
ನಿನಗೆ ಕೊಡಲಾಗುವುದು. ಜನರು ದೇವದಾರು
ಮರಗಳನ್ನೂ ಇತರ ವಿಶೇಷ ಮರಗಳನ್ನೂ ನಿನಗೆ
ತಂದು ಕೊಡುವರು. ಈ ಮರಗಳಿಂದ

ತೊಲೆಗಳನ್ನು ಮಾಡುವರು. ಮತ್ತು ನನ್ನ ಪವಿತ್ರ ಆಲಯವನ್ನು ಸೌಂದರ್ಯಗೊಳಿಸುವರು. ಅದು ನನ್ನ ಸಿಂಹಾಸನದ ಮುಂದಿರುವ ಕಾಲ್ಮಣೆ ಯಂತಿರುವದು. ಆದಕ್ಕೆ ನಾನು ಹೆಚ್ಚಾದ ಗೌರವ ಕೊಡುವೆನು.

14 ಹಿಂದಿನ ದಿವಸಗಳಲ್ಲಿ ಜನರು ನಿನಗೆ ಹಿಂಸೆ ಕೊಟ್ಟರು. ಆ ಜನರು ಈಗ ನಿನ್ನ ಮುಂದೆ ಅಡ್ಡ ಬೀಳುವರು. ಗತಿಸಿದ ದಿವಸಗಳಲ್ಲಿ ಜನರು ನಿನ್ನನ್ನು ದ್ವೇಷಿಸಿದರು. ಈಗ ನಿನ್ನ ಕಾಲು ಮುಂದೆ ಬೀಳು ವರು. ಅವರು ನಿನ್ನನ್ನು ಯೆಹೋವನ ಪಟ್ಟಣ. ಇಸ್ರೇಲಿನ ಪರಿಶುದ್ಧನಾದ ಯೆಹೋವನ ಚೀಯೋನ್ ಎಂದು ಕರೆಯುವರು.''

## ಹೊಸ ಇಸ್ರೇಲ್ –ಸಮಾಧಾನದ ದೇಶ

15 ''ನೀನು ಮತ್ತೆಂದಿಗೂ ಒಬ್ಬಂಟಿಗನಾಗಿರುವದಿಲ್ಲ. ನೀನು ಮತ್ತೆ ಎಂದಿಗೂ ದ್ವೇಷಿಸಲ್ಪಡುವದಿಲ್ಲ. ನೀನು ತಿರುಗಿ ಬರಿದಾಗುವುದಿಲ್ಲ. ನಿನ್ನನ್ನು ಶಾಶ್ವತ ವಾದ ಮಹೋನ್ನತನನ್ನಾಗಿ ಮಾಡುವೆನು. ನೀನು ನಿತ್ಯಕಾಲಕ್ಕೂ ಸಂತೋಷದಲ್ಲಿರುವೆ.

16 ಜನಾಂಗಗಳು ನಿನಗೆ ಬೇಕಾದದ್ದೆಲ್ಲವನ್ನು ಕೊಡು ವರು. ಒಂದು ಮಗು ಹೇಗೆ ತಾಯಿಯ ಹಾಲನ್ನು ಕುಡಿಯುವದೋ ಅದೇ ರೀತಿಯಲ್ಲಿ ಅರಸರುಗ ಳಿಂದ ನೀವು ಧನವನ್ನು ಕುಡಿಯುವಿರಿ. ಆಗ ಯೆಹೋವನಾದ ನಾನೇ ನಿಮ್ಮನ್ನು ರಕ್ಷಿಸಿದೆನೆಂದು ತಿಳಿದುಕೊಳ್ಳುವಿರಿ. ಆಗ ಯಾಕೋಬನ ಮಹಾ ದೇವರು ನಿಮ್ಮನ್ನು ಕಾಪಾಡುವನೆಂದು ತಿಳಿದು ಕೊಳ್ಳುವಿರಿ.

17 ಈಗ ನಿಮ್ಮಲ್ಲಿ ತಾಮ್ರವಿದೆ. ನಾನು ನಿಮಗೆ ಬಂಗಾರ ವನ್ನು ತರುವೆನು. ಈಗ ನಿಮ್ಮಲ್ಲಿ ಕಬ್ಬಿಣವಿದೆ. ನಾನು ನಿಮಗೆ ಬೆಳ್ಳಿಯನ್ನು ತರುವೆನು. ನಿಮ್ಮ ಮರವನ್ನು ತಾಮ್ರವನ್ನಾಗಿ ಪರಿವರ್ತಿಸುವೆನು. ನಿಮ್ಮ ಕಲ್ಲು ಬಂಡೆಗಳನ್ನು ಕಬ್ಬಿಣವನ್ನಾಗಿ ಮಾಡುವೆನು. ನಿಮ್ಮ ಶಿಕ್ಷೆಯನ್ನು ಸಮಾಧಾನವನ್ನಾಗಿ ಮಾಡುವೆನು. ಈಗ ನಿಮ್ಮನ್ನು ಹಿಂಸಿಸುವ ಜನರು ನಿಮಗೆ ಸಹಾಯ ಮಾಡುವರು.

18 ಇನ್ನು ಮುಂದೆ ಮತ್ತೆ ಹಿಂಸಾಚಾರದ ವರ್ತಮಾನವು ನಿಮ್ಮಲ್ಲಿರುವದಿಲ್ಲ. ಜನರು ಇನ್ನೆಂದಿಗೂ ನಿಮ್ಮ ಮೇಲೆರಗಿ ನಿಮ್ಮನ್ನು ದೋಚುವದಿಲ್ಲ. ನಿಮ್ಮ ಗೋಡೆಗಳಿಗೆ 'ರಕ್ಷಣೆ' ಎಂದೂ ದ್ವಾರಗಳಿಗೆ ಸ್ತೋತ್ರವೆಂದೂ ಹೆಸರಿಡುವಿರಿ.

19 ಇನ್ನು ಮುಂದೆ ಹಗಲು ಹೊತ್ತಿನಲ್ಲಿ ಸೂರ್ಯನು ನಿಮಗೆ ಬೆಳಕಾಗಿರುವದಿಲ್ಲ; ರಾತ್ರಿಕಾಲದಲ್ಲಿ ಚಂದ್ರನ ಪ್ರಕಾಶವು ನಿಮಗೆ ಬೆಳಕಾಗಿರುವದಿಲ್ಲ. ಯಾಕೆಂದರೆ ಯೆಹೋವನೇ ನಿಮ್ಮ ನಿತ್ಯಕಾಲದ ಬೆಳಕಾಗಿರುವನು. ನಿಮ್ಮ ದೇವರು ನಿಮ್ಮ ಮಹಿಮೆಯಾಗಿರುವನು.

20 ನಿಮ್ಮ ಸೂರ್ಯನು ಮತ್ತೆ ಅಸ್ತಮಾನವಾಗುವದಿಲ್ಲ. ನಿಮ್ಮ ಚಂದ್ರನು ಮತ್ತೆಂದಿಗೂ ಕಪ್ಪಾಗುವದಿಲ್ಲ. ಯಾಕೆಂದರೆ ಯೆಹೋವನು ನಿಮ್ಮ ನಿರಂತರದ ಬೆಳಕಾಗಿರುವನು. ನಿಮ್ಮ ದುಃಖದ ಕಾಲವು ಅಂತ್ಯ ವಾಗುವದು.

21 ನಿನ್ನ ಜನರೆಲ್ಲಾ ನೀತಿಯಲ್ಲಿ ಜೀವಿಸುವರು. ಅವರು ಭೂಮಿಗೆ ಶಾಶ್ವತವಾದ ಬಾಧ್ಯಸ್ತರಾಗುವರು. ಆ ಜನರನ್ನು ನಾನೇ ನಿರ್ಮಿಸಿದೆನು. ನಾನು ನನ್ನ ಸ್ವಂತ ಕೈಗಳಿಂದ ನಿರ್ಮಿಸಿದ ಆಶ್ಚರ್ಯಕರವಾದ ಸಸಿಗ ಳಂತೆ ಅವರಿರುವರು.

22 ಅತ್ಯಂತ ಚಿಕ್ಕ ಕುಟುಂಬವು ದೊಡ್ಡ ಕುಲವಾಗು ವದು. ಅತ್ಯಂತ ಎಳೆಯ ಕುಟುಂಬವು ಬಲಾಢ್ಯ ವಾದ ಜನಾಂಗವಾಗುವದು. ತಕ್ಕ ಕಾಲದಲ್ಲಿ ಯೆಹೋವನಾದ ನಾನು ಬೇಗನೇ ಬರುವೆನು. ಇವುಗಳೆಲ್ಲಾ ನೆರವೇರುವಂತೆ ಮಾಡುವೆನು.''

## ಯೆಹೋವನ ಸ್ವಾತಂತ್ರ ಸಂದೇಶ

61 ಯೆಹೋವನ ಸೇವಕನು ಹೇಳುವದೇನೆಂದರೆ,
''ನನ್ನ ಒಡೆಯನಾದ ಯೆಹೋವನು ತನ್ನ
ಆತ್ಮವನ್ನು ನನ್ನಲ್ಲಿರಿಸಿದನು. ಬಡವರಿಗೆ ಸುವಾರ್ತೆಯನ್ನು
ತಿಳಿಸಲೂ ದುಃಖಿಸುವವರನ್ನು ಸಂತೈಸಲೂ ನನ್ನನ್ನು
ಆರಿಸಿರುತ್ತಾನೆ. ಸೆರೆಹಿಡಿಯಲ್ಪಟ್ಟಿರುವವರನ್ನು ಸ್ವತಂತ್ರ
ರಾದರೆಂದು ಹೇಳಲೂ ಕೈದಿಗಳನ್ನು ಬಿಡುಗಡೆ
ಮಾಡಲ್ಪಟ್ಟವರೆಂದು ಹೇಳಲೂ ದೇವರು ನನ್ನನ್ನು
ಕಳುಹಿಸಿದನು. 2 ಯೆಹೋವನು ತಾನು ಕರುಣೆ
ತೋರುವ ಸಮಯದ ಕುರಿತಾಗಿ ಸಾರುವಂತೆ ನನ್ನನ್ನು
ಕಳುಹಿಸಿದನು. ದುಷ್ಟರನ್ನು ಶಿಕ್ಷಿಸುವ ಸಮಯವನ್ನು
ಸಾರಲು ದೇವರು ನನ್ನನ್ನು ಕಳುಹಿಸಿದನು. ದುಃಖಪಡುವ
ಜನರನ್ನು ಸಂತೈಸಲು ದೇವರು ನನ್ನನ್ನು ಕಳುಹಿಸಿದನು.
3 ಚೀಯೋನಿನಲ್ಲಿ ದುಃಖಿಸುವ ಜನರ ಬಳಿಗೆ ನನ್ನನ್ನು
ಕಳುಹಿಸಿದನು. ನಾನು ಅವರನ್ನು ಉತ್ಸವಕ್ಕಾಗಿ ಸಿದ್ಧ
ಪಡಿಸುವೆನು. ಅವರ ತಲೆಯ ಮೇಲಿರುವ ಬೂದಿಯನ್ನು
ತೆಗೆದುಹಾಕಿ ಅದರ ಬದಲಾಗಿ ಕಿರೀಟವನ್ನು ತೊಡಿಸು
ವೆನು. ಅವರ ದುಃಖವನ್ನು ತೆಗೆದುಹಾಕಿ ಅವರಿಗೆ ತೈಲ
ವೆಂಬ ಸಂತೋಷವನ್ನು ಅನುಗ್ರಹಿಸುವೆನು. ಅವರ ದುಃಖ
ವನ್ನೆಲ್ಲಾ ನಿವಾರಿಸಿ ಉತ್ಸವಕ್ಕಾಗಿ ಅವರಿಗೆ ಬಟ್ಟೆಯನ್ನು
ತೊಡಿಸುವೆನು. ಅವರನ್ನು ಒಳ್ಳೆಯ ಮರಗಳಂತಲೂ

ದೇವರ ಆಶ್ಚರ್ಯಕರವಾದ ಸಸಿಯೆಂತಲೂ ಕರೆಯು
ವದಕ್ಕಾಗಿ ದೇವರೇ ನನ್ನನ್ನು ಕಳುಹಿಸಿದನು.
4''ಆ ಸಮಯದಲ್ಲಿ ಹಾಳು ಬಿದ್ದ ಹಳೇ ಪಟ್ಟಣಗಳು
ಮತ್ತೆ ಕಟ್ಟಲ್ಪಡುವವು. ಅವುಗಳು ಮುಂಚೆ ಹೇಗಿದ್ದವೋ
ಹಾಗೆಯೇ ಹೊಸದಾಗಿ ಕಾಣಿಸುವವು. ಹಲವು ವರ್ಷಗಳ
ಕಾಲ ಕೆಡವಲ್ಪಟ್ಟು ಹಾಳುಬಿದ್ದ ಪಟ್ಟಣಗಳು ಹೊಸದಾಗಿ
ಕಾಣಿಸುವವು.
5''ಆಗ ನಿನ್ನ ವೈರಿಗಳು ನಿನ್ನ ಬಳಿಗೆ ಬಂದು ನಿನ್ನ ಕುರಿ
ಮಂದೆಯನ್ನು ಮೇಯಿಸುವರು. ನಿನ್ನ ವೈರಿಗಳ ಮಕ್ಕಳು
ನಿನ್ನ ಹೊಲಗದ್ದೆಗಳಲ್ಲಿಯೂ ತೋಟಗಳಲ್ಲಿಯೂ ಕೆಲಸ
ಮಾಡುವರು. 6ಆಗ ನಿನ್ನನ್ನು ಯೆಹೋವನ ಯಾಜಕ
ರೆಂದೂ ದೇವರ ಸಹಾಯಕರೆಂದೂ ಕರೆಯುವರು.
ಭೂಲೋಕದ ಎಲ್ಲಾ ದೇಶಗಳ ಐಶ್ವರ್ಯವು ನಿಮ್ಮ
ಕೈಸೇರುವುದರಿಂದ ನೀವು ಹೆಚ್ಚಳಪಡುವಿರಿ.
7''ಗತಿಸಿದ ದಿವಸಗಳಲ್ಲಿ ಜನರು ನಿಮ್ಮನ್ನು ನಾಚಿಕೆಗೆ
ಗುರಿಪಡಿಸಿದರು; ಕೆಟ್ಟಮಾತುಗಳನ್ನಾಡಿದರು; ಬೇರೆ
ಜನರಿಗಿಂತ ನೀವು ಹೆಚ್ಚಾಗಿ ನಾಚಿಕೆಗೆ ಒಳಗಾದಿರಿ. ಅದ
ಕ್ಕಾಗಿ ನಿಮ್ಮ ಭೂಮಿಯಲ್ಲಿ ಬೇರೆ ಸ್ಥಳಗಳಿಗಿಂತ ಎರಡ
ರಷ್ಟು ಹೆಚ್ಚು ಕೊಯಿಲು ಮಾಡುವಿರಿ. ನೀವು ಶಾಶ್ವತ
ವಾದ ಸಂತೋಷವನ್ನು ಪಡೆದುಕೊಳ್ಳುವಿರಿ.
8ಯಾಕೆಂದರೆ ನಾನೇ ಯೆಹೋವನು. ನಾನು ನ್ಯಾಯ
ದಲ್ಲಿ ಸಂತೋಷಿಸುವೆನು. ನಾನು ಕದಿಯುವದನ್ನೂ
ಎಲ್ಲಾ ದುಷ್ಟತ್ವಗಳನ್ನೂ ದ್ವೇಷಿಸುತ್ತೇನೆ. ಆದಕ್ಕಾಗಿ ನಾನು
ಅಂಥಾ ಜನರಿಗೆ ದೊರಕಬೇಕಾದ ಶಿಕ್ಷೆಯನ್ನು ಕೊಡು
ವೆನು. ನನ್ನ ಜನರೊಂದಿಗೆ ನಿತ್ಯಕಾಲದ ಒಡಂಬಡಿಕೆ
ಯನ್ನು ಮಾಡಿಕೊಳ್ಳುವೆನು. 9ಎಲ್ಲಾ ಜನಾಂಗಗಳವರು
ನನ್ನ ಜನರನ್ನೂ ನನ್ನ ದೇಶದ ಮಕ್ಕಳನ್ನೂ ತಿಳಿದು
ಕೊಳ್ಳುವರು. ಅವರನ್ನು ಜನರು ನೋಡಿದಾಗ
ಯೆಹೋವನು ಅವರನ್ನು ಆಶೀರ್ವದಿಸುತ್ತಿದ್ದಾನೆ ಎಂದು
ತಿಳಿಯುವರು.''

### ದೇವರ ಸೇವಕನು ನೀತಿಯನ್ನೂ ರಕ್ಷಣೆಯನ್ನೂ ತರುತ್ತಾನೆ

10 ''ಯೆಹೋವನು ನನ್ನನ್ನು ಸಂತೋಷಭರಿತನನ್ನಾಗಿ
ಮಾಡುತ್ತಾನೆ. ನನ್ನ ಸಂಪೂರ್ಣ ವ್ಯಕ್ತಿತ್ವವು ನನ್ನ
ದೇವರಲ್ಲಿ ಸಂತೋಷಿಸುತ್ತದೆ. ಯೆಹೋವನು
ರಕ್ಷಣೆಯೆಂಬ ವಸ್ತ್ರವನ್ನು ನನಗೆ ತೊಡಿಸಿದ್ದಾನೆ.
ಮದುವೆಯಲ್ಲಿ ಮದುವಣಿಗನು ಧರಿಸಿಕೊಳ್ಳುವ
ಬಟ್ಟೆಯಂತೆ ಅದು ನಯವಾಗಿದೆ. ಯೆಹೋವನು
ನನಗೆ ನೀತಿಯೆಂಬ ನಿಲುವಂಗಿಯನ್ನು ತೊಡಿಸಿ
ರುತ್ತಾನೆ. ಅದು ಮದುಮಗಳು ಮದುವೆಯಲ್ಲಿ
ಧರಿಸಿಕೊಳ್ಳುವ ಬಟ್ಟೆಯಂತಿದೆ.

11 ''ಭೂಮಿಯು ಸಸಿಗಳನ್ನು ಬೆಳೆಸುತ್ತದೆ. ಜನರು
ತೋಟದಲ್ಲಿ ಬೀಜ ಬಿತ್ತುವರು. ತೋಟವು ಬೀಜ
ವನ್ನು ಬೆಳೆಸುತ್ತದೆ. ಅದೇ ರೀತಿಯಲ್ಲಿ ದೇವರು
ನೀತಿಯನ್ನು ಬೆಳೆಸುತ್ತಾನೆ. ಸ್ತುತಿ ಎಂಬದನ್ನು
ಎಲ್ಲಾ ಜನಾಂಗಗಳಲ್ಲಿ ಯೆಹೋವನು
ಬೆಳೆಸುತ್ತಾನೆ.''

### ನೀತಿಯುತವಾದ ಹೊಸ ಜೆರುಸಲೇಮ್

62 ''ಚೀಯೋನನ್ನು ನಾನು ಪ್ರೀತಿಸುತ್ತೇನೆ.
ಆಕೆಯ ವಿಷಯವಾಗಿ ನಾನು ಮಾತಾಡು
ತ್ತಲೇ ಇರುವೆನು. ನಾನು ಜೆರುಸಲೇಮನ್ನು ಪ್ರೀತಿ
ಸುತ್ತೇನೆ. ಅದರ ವಿಷಯವಾಗಿ ಮಾತನಾಡುವ
ದನ್ನು ನಾನು ನಿಲ್ಲಿಸುವದಿಲ್ಲ. ಧರ್ಮವು ಬೆಳಕಿ
ನಂತೆ ಪ್ರಕಾಶಿಸುವ ತನಕ ನಾನು ಮಾತನಾಡು
ವೆನು. ರಕ್ಷಣೆಯು ಬೆಂಕಿಯಂತೆ ಪ್ರಜ್ವಲಿಸುವ
ವರೆಗೆ ನಾನು ಮಾತನಾಡುವೆನು.

2 ಆಗ ಎಲ್ಲಾ ಜನಾಂಗದವರು ಆಕೆಯ ನ್ಯಾಯವನ್ನು
ನೋಡುವರು. ಎಲ್ಲಾ ಅರಸರುಗಳು ಆಕೆಯ
ಮಹಿಮೆಯನ್ನು ನೋಡುವರು. ಆಗ ನಿನಗೊಂದು
ಹೊಸ ಹೆಸರನ್ನು ಕೊಡುವೆನು; ಯೆಹೋವನು
ತಾನೇ ಆ ಹೆಸರನ್ನು ಕೊಡುವನು.

3 ಯೆಹೋವನು ನಿನ್ನಲ್ಲಿ ಬಹಳವಾಗಿ ಹೆಚ್ಚಳ
ಪಡುವನು. ನೀನು ಆತನ ಕೈಯಲ್ಲಿ ಒಂದು
ಸುಂದರವಾದ ಕಿರೀಟದಂತಿರುವೆ.

4 ದೇವರು ತೊರೆದ ಜನಾಂಗವೆಂದೂ ದೇವರು ನಾಶ
ಮಾಡಿದ ದೇಶವೆಂದೂ ನಿಮ್ಮನ್ನು ಇನ್ನು ಮುಂದೆ
ಯಾರೂ ಕರೆಯುವದಿಲ್ಲ. 'ದೇವರ ಪ್ರಿಯ
ಜನರು' ಎಂದು ನೀವು ಕರೆಯಲ್ಪಡುವಿರಿ. ನಿಮ್ಮ
ದೇಶವು 'ದೇವರ ಮದಲಗಿತ್ತಿ' ಎಂದು ಕರೆಯಲ್ಪ
ಡುವದು. ಯಾಕೆಂದರೆ ಯೆಹೋವನು ನಿಮ್ಮನ್ನು
ಪ್ರೀತಿಸುತ್ತಾನೆ; ನಿಮ್ಮ ದೇಶವು ಆತನಿಗೆ ಸೇರಿದೆ.

5 ಯೌವನಸ್ಥನು ಕನ್ನಿಕೆಯನ್ನು ಪ್ರೀತಿಸಿ ಮದುವೆ
ಯಾಗುವನು; ತನ್ನ ಹೆಂಡತಿಯನ್ನಾಗಿ ಆಕೆಯನ್ನು
ಸ್ವೀಕರಿಸುವನು. ಅದೇ ರೀತಿಯಲ್ಲಿ ದೇವರು
ನಿಮ್ಮನ್ನು ವಿವಾಹವಾಗುತ್ತಾನೆ. ದೇಶವು ತುಂಬಿ
ಹೋಗುವಷ್ಟು ಮಕ್ಕಳನ್ನು ಆತನು ಪಡೆದುಕೊಳ್ಳು
ತ್ತಾನೆ. ಒಬ್ಬನು ಹೊಸದಾಗಿ ಮದುವೆಯಾದ ತನ್ನ
ಹೆಂಡತಿಯೊಡನೆ ಉಲ್ಲಾಸದಿಂದಿರುವಂತೆ ನಿನ್ನ
ದೇವರು ನಿನ್ನಲ್ಲಿ ಆನಂದಿಸುವನು.''

### ದೇವರು ತನ್ನ ವಾಗ್ದಾನವನ್ನು ನೆರವೇರಿಸುವನು

6 ''ಜೆರುಸಲೇಮೇ, ನಿನ್ನ ಗೋಡೆಯ ಮೇಲೆ ನಾನು

ಕಾವಲುಗಾರರನ್ನು ಇಟ್ಟಿರುತ್ತೇನೆ. ಆ ಕಾವಲು ಗಾರರು ಮೌನವಾಗಿರುವದಿಲ್ಲ. ಅವರು ಹಗಲು ರಾತ್ರಿ ಪ್ರಾರ್ಥಿಸುತ್ತಾ ಇರುವರು.'' ಕಾವಲು ಗಾರರೇ, ನೀವು ಯೆಹೋವನಿಗೆ ಪ್ರಾರ್ಥಿಸುತ್ತಾ ಇರಬೇಕು. ಆತನ ವಾಗ್ದಾನಗಳನ್ನು ನೀವು ಆತನ ನೆನಪಿಗೆ ತರಬೇಕು. ಪ್ರಾರ್ಥಿಸುವದನ್ನು ಎಂದಿಗೂ ನಿಲ್ಲಿಸಬೇಡಿ.

7 ಜೆರುಸಲೇಮ್ ನಗರವು ಜನರ ಹೊಗಳಿಕೆಗೆ ಪಾತ್ರ ವಾಗುವಂತೆ ಯೆಹೋವನು ಮಾಡುವ ತನಕ ನೀವು ಆತನಿಗೆ ಪ್ರಾರ್ಥಿಸುತ್ತಿರಬೇಕು.

8 ಯೆಹೋವನು ವಾಗ್ದಾನವನ್ನು ಮಾಡಿರುತ್ತಾನೆ. ಆತನ ಸ್ವಂತ ಹೆಸರೇ ಅದಕ್ಕೆ ಸಾಕ್ಷಿಯಾಗಿದೆ. ಆತನು ತನ್ನ ಸಾಮರ್ಥ್ಯದಿಂದ ವಾಗ್ದಾನವನ್ನು ನೆರವೇರಿಸು ವನು. ಯೆಹೋವನು ಹೇಳಿದ್ದೇನೆಂದರೆ, ''ನಿನ್ನ ಆಹಾರವನ್ನು ನಾನು ನಿನ್ನ ವೈರಿಗಳಿಗೆ ಮತ್ತೆ ಕೊಡು ವದಿಲ್ಲವೆಂದು ವಾಗ್ದಾನ ಮಾಡುತ್ತೇನೆ. ನೀನು ತಯಾರಿಸುವ ದ್ರಾಕ್ಷಾರಸವನ್ನು ಇನ್ನು ಮುಂದೆ ನಿನ್ನ ವೈರಿಗಳು ಸೇವಿಸುವದಿಲ್ಲವೆಂದು ನಾನು ವಾಗ್ದಾನ ಮಾಡುತ್ತೇನೆ.

9 ಒಬ್ಬನು ಆಹಾರವನ್ನು ಒಟ್ಟುಗೂಡಿಸಿ ತಾನೇ ತಿನ್ನು ವನು. ಅವನು ದೇವರನ್ನು ಸ್ತುತಿಸುವನು. ದ್ರಾಕ್ಷಿ ಹಣ್ಣನ್ನು ಶೇಖರಿಸುವವನು ಅದರ ರಸವನ್ನು ಕುಡಿ ಯುವನು. ಇವೆಲ್ಲವೂ ನನ್ನ ಪರಿಶುದ್ಧ ದೇಶದಲ್ಲಿ ಆಗುವದು.''*

10 ದ್ವಾರದೊಳಗಿಂದ ಬನ್ನಿರಿ. ಜನರು ಬರುವದಕ್ಕೆ ದಾರಿಯನ್ನು ಸರಿಮಾಡಿರಿ. ರಸ್ತೆಯನ್ನು ಸಿದ್ಧ ಪಡಿ ಸಿರಿ. ಅದರ ಮೇಲಿರುವ ಕಲ್ಲುಗಳನ್ನು ತೆಗೆದು ಬಿಡಿರಿ. ಜನಾಂಗಗಳು ಕಾಣುವಂತೆ ಧ್ವಜವನ್ನು ಏರಿಸಿರಿ.

11 ಯೆಹೋವನು ದೂರದೇಶಗಳವರಿಗೆ ಹೇಳುವದೇ ನೆಂದರೆ, ''ಚೀಯೋನಿನ ಜನರಿಗೆ ತಿಳಿಸಿರಿ, ನೋಡು, ನಿನ್ನ ರಕ್ಷಕನು ಬರುತ್ತಿದ್ದಾನೆ. ತನ್ನ ಕೈಯಲ್ಲಿ ನಿನಗೆ ಪ್ರತಿಫಲವನ್ನು ತೆಗೆದುಕೊಂಡು ಬರುತ್ತಿದ್ದಾನೆ.''

12 ಆತನ ಜನರು ಪವಿತ್ರರೆಂದೂ ಯೆಹೋವನಿಂದ ರಕ್ಷಿಸಲ್ಪಟ್ಟವರೆಂದೂ ಕರೆಯಲ್ಪಡುವರು. ಜೆರುಸ ಲೇಮ್, ''ದೇವರಿಗೆ ಬೇಕಾದ ಪಟ್ಟಣ'' ವೆಂದೂ, ''ದೇವರಿರುವ ಪಟ್ಟಣ'' ವೆಂದೂ ಕರೆಯ ಲ್ಪಡುವದು.

## ಯೆಹೋವನು ತನ್ನ ಜನರಿಗೆ ನ್ಯಾಯ ತೀರಿಸುವನು

63 ಎದೋಮಿನಿಂದ ಬರುತ್ತಿರುವ ಇವನು ಯಾರು? ಅವನು ಬೊಜ್ರದಿಂದ ಬರುತ್ತಿದ್ದಾನೆ. ಆತನ ಬಟ್ಟೆಯು ಕಡುಕೆಂಪು ಬಣ್ಣದಿಂದ ತುಂಬಿದೆ. ತನ್ನ ಬಟ್ಟೆಯಲ್ಲಿ ಅವನು ಮಹಿಮಾ ಸ್ವರೂಪನಾಗಿ ಕಾಣುತ್ತಿದ್ದಾನೆ. ಆತನು ತನ್ನ ಬಲ ಸಾಮರ್ಥ್ಯಗಳಿಂದಾಗಿ ನೇರವಾಗಿ ನಡೆಯುತ್ತಿದ್ದಾನೆ. ಆತನು ''ನಾನು ಸತ್ಯವನ್ನೇ ಹೇಳುತ್ತೇನೆ, ನಿನ್ನನ್ನು ರಕ್ಷಿಸಲು ನನಗೆ ಸಾಮರ್ಥ್ಯ ಉಂಟು.'' ಎಂದು ಹೇಳುವನು.

2 ''ನಿನ್ನ ಬಟ್ಟೆ ಕಡುಕೆಂಪಾಗಲು ಕಾರಣವೇನು? ದ್ರಾಕ್ಷಿಹಣ್ಣುಗಳನ್ನು ತುಳಿದು ರಸ ತೆಗೆಯುವವನ ಬಟ್ಟೆಯಂತೆ ಅವು ಇವೆ.''

3 ಅವನ ಉತ್ತರ: ''ದ್ರಾಕ್ಷಿತೊಟ್ಟಿಯಲ್ಲಿ ನಾನೊಬ್ಬನೇ ನಡೆದೆನು. ಯಾರೂ ನನಗೆ ಸಹಾಯ ಮಾಡಲಿಲ್ಲ. ನಾನು ಕೋಪಗೊಂಡು ದ್ರಾಕ್ಷಿಹಣ್ಣಿನ ಮೇಲೆ ನಡೆದೆನು. ಅದರ ರಸ ನನ್ನ ಬಟ್ಟೆಯ ಮೇಲೆ ಹಾರಿತು. ಆದುದರಿಂದ ನನ್ನ ಬಟ್ಟೆಗಳು ಮಲಿನ ವಾದವು.

4 ಜನರನ್ನು ಶಿಕ್ಷಿಸಲು ನಾನೊಂದು ಸಮಯವನ್ನು ನಿಗದಿ ಮಾಡಿರುತ್ತೇನೆ. ಈಗ ನನ್ನ ಜನರನ್ನು ರಕ್ಷಿಸಿ ಕಾಪಾಡುವ ಸಮಯ ಬಂದಿದೆ.

5 ನಾನು ಸುತ್ತಲೂ ನೋಡಿದಾಗ ನನಗೆ ಸಹಾಯ ಮಾಡುವವರು ಯಾರೂ ಇರಲಿಲ್ಲ. ನನ್ನನ್ನು ಯಾರೂ ಬೆಂಬಲಿಸದೆ ಇರುವದನ್ನು ನೋಡಿ ನನಗೆ ಆಶ್ಚರ್ಯವಾಯಿತು. ನನ್ನ ಜನರನ್ನು ರಕ್ಷಿಸಲು ನನ್ನ ಬಲವನ್ನೇ ಪ್ರಯೋಗಿಸಿದೆನು. ನನ್ನ ಕೋಪವು ನನ್ನನ್ನು ಬಲಪಡಿಸಿತು.

6 ನಾನು ಕೋಪಗೊಂಡಾಗ ಜನರ ಮೇಲೆ ನಡೆದಾಡಿದೆನು. ನಾನು ಸಿಟ್ಟುಗೊಂಡಾಗ ಅವರನ್ನು ಶಿಕ್ಷಿಸಿದೆನು. ಅವರ ರಕ್ತವನ್ನು ನೆಲದ ಮೇಲೆ ಚೆಲ್ಲಿದೆನು.''

## ಯೆಹೋವನು ತನ್ನ ಜನರಿಗೆ ಕರುಣೆತೋರುವನು

7 ಯೆಹೋವನು ಕುರುಣಾಶೀಲನೆಂಬುದನ್ನು ನೆನಪು ಮಾಡಿಕೊಳ್ಳುವೆನು. ಆತನನ್ನು ಸ್ತುತಿಸಲು ನೆನಪು ಮಾಡಿಕೊಳ್ಳುವೆನು. ಇಸ್ರೇಲ್ ಕುಟುಂಬಕ್ಕೆ ಯೆಹೋವನು ಎಷ್ಟೋ ಮೇಲನ್ನು ಮಾಡಿದ್ದಾನೆ. ನಮ್ಮ ಮೇಲೆ ಯೆಹೋವನು ತನ್ನ ದಯೆಯನ್ನು

---

**ಇವೆಲ್ಲವೂ … ಆಗುವದು** ಅಕ್ಷರಶಃ ''ಅವರು ನನ್ನ ಆಲಯದ ಅಂಗಳದಲ್ಲಿ ದ್ರಾಕ್ಷಾರಸವನ್ನು ಕುಡಿಯುವರು.''

ಸುರಿಸಿದ್ದಾನೆ . ನಮಗೆ ಕರುಣೆಯನ್ನು
ತೋರಿಸಿದ್ದಾನೆ.
8 ಯೆಹೋವನು ಹೇಳಿದ್ದೇನೆಂದರೆ: ‘‘ಇವರೇ ನನ್ನ
ಜನರು. ಇವರೆಲ್ಲಾ ನನ್ನ ಸ್ವಂತ ಮಕ್ಕಳು .’’ ಆದುದ
ರಿಂದ ಯೆಹೋವನು ಅವರನ್ನು ರಕ್ಷಿಸಿದ್ದಾನೆ.
9 ಜನರಿಗೆ ಅನೇಕ ತೊಂದರೆಗಳು ಪ್ರಾಪ್ತವಾಗಿದ್ದವು.
ಆದರೆ ಯೆಹೋವನು ಅವರಿಗೆ ವಿರುದ್ಧನಾಗಿರ
ಲಿಲ್ಲ. ಆತನು ಅವರನ್ನು ಪ್ರೀತಿಸಿ ಅವರಿಗಾಗಿ ಚಿಂತಿ
ಸಿದನು; ತನ್ನ ವಿಶೇಷ ದೂತನನ್ನು ಕಳುಹಿಸಿ ಅವ
ರನ್ನು ರಕ್ಷಿಸಿದನು. ಯೆಹೋವನು ಅವರನ್ನು ನಿತ್ಯ
ಕಾಲಕ್ಕೂ ಸಲಹುವನು. ತನ್ನ ಜನರಿಗೆ
ಯೆಹೋವನು ಸಲಹುವದನ್ನು ನಿಲ್ಲಿಸಲಿಲ್ಲ.
10 ಆದರೆ ಜನರು ಯೆಹೋವನಿಗೆ ವಿರುದ್ಧವಾಗಿ
ಎದ್ದರು. ಆತನ ಪರಿಶುದ್ಧಾತ್ಮನನ್ನು ದುಃಖ ಪಡಿಸಿ
ದರು. ಯೆಹೋವನು ಅವರ ಶತ್ರುವಾಗಿ ಪರಿಣ
ಮಿಸಿದನು. ಅಂಥಾ ಜನರಿಗೆ ವಿರುದ್ಧವಾಗಿ
ಯೆಹೋವನು ಯುದ್ಧಮಾಡಿದನು.
11 ಆದರೆ ಯೆಹೋವನು ಬಹಳ ಕಾಲದ ಹಿಂದೆ
ನಡೆದುದನ್ನು ಇನ್ನೂ ಜ್ಞಾಪಕದಲ್ಲಿಟ್ಟು ಕೊಂಡಿ
ದ್ದಾನೆ. ಆತನು ಮೋಶೆಯನ್ನೂ ಅವನ ಜನರನ್ನೂ
ನೆನಪು ಮಾಡಿಕೊಳ್ಳುತ್ತಾನೆ. ಆ ಜನರನ್ನು ಸಮು
ದ್ರದ ಮೂಲಕ ಬರಮಾಡಿದವನು ಯೆಹೋ
ವನೇ. ಆತನು ತನ್ನ ಕುರಿಮಂದೆಯನ್ನು ನಡೆಸಲು
ತನ್ನ ಕುರುಬರನ್ನು ಉಪಯೋಗಿಸಿದನು. ಆದರೆ
ಈಗ ಯೆಹೋವನೆಲ್ಲಿ? ಮೋಶೆಯಲ್ಲಿ ತನ್ನ ಪವಿ
ತ್ರಾತ್ಮನನ್ನು ಇಟ್ಟ ಯೆಹೋವನೆಲ್ಲಿ?
12 ಯೆಹೋವನು ಮೋಶೆಯನ್ನು ತನ್ನ ಬಲವಾದ
ಹಸ್ತದಿಂದ ನಡೆಸಿದನು. ತನ್ನ ಅದ್ಭುತ ಶಕ್ತಿಯಿಂದ
ಮೋಶೆಯನ್ನು ನಡಿಸಿದನು. ತನ್ನ ಜನರು ಸಮುದ್ರ
ದೊಳಗಿಂದ ನಡೆದುಹೋಗಲೆಂದು ಯೆಹೋ
ವನು ಸಮುದ್ರವನ್ನು ಇಬ್ಭಾಗ ಮಾಡಿದನು. ಅಂಥಾ
ಅದ್ಭುತಕಾರ್ಯಗಳ ನಿಮಿತ್ತ ತನ್ನ ಹೆಸರನ್ನು
ಪ್ರಸಿದ್ಧಿಪಡಿಸಿದನು.
13 ಆಳವಾದ ಸಮುದ್ರದೊಳಗಿಂದ ಯೆಹೋವನು
ತನ್ನ ಜನರನ್ನು ನಡೆಸಿದನು. ಕುದುರೆಯು ಮರು
ಭೂಮಿಯಲ್ಲಿ ನಡೆಯುವಂತೆ ಜನರು ಎಡವಿ
ಬೀಳದೆ ನಡೆದರು.
14 ಹೊಲದಲ್ಲಿ ನಡೆಯುತ್ತಿರುವಾಗ ಒಂದು ದನವೂ
ಬೀಳಲಿಲ್ಲ. ಅದೇ ರೀತಿಯಲ್ಲಿ ಸಮುದ್ರದ ಮಧ್ಯ
ದಲ್ಲಿ ನಡೆಯುವಾಗ ಅವರು ಬೀಳಲಿಲ್ಲ.
ವಿಶ್ರಾಂತಿಯ ಸ್ಥಳಕ್ಕೆ ಯೆಹೋವನ ಆತ್ಮವು ಅವ
ರನ್ನು ನಡೆಸಿತು. ದಾರಿಯುದ್ದಕ್ಕೂ ಜನರು
ಸುರಕ್ಷಿತರಾಗಿದ್ದರು. ಯೆಹೋವನೇ, ಹೀಗೆ ನೀನು
ನಿನ್ನ ಜನರನ್ನು ನಡೆಸಿದೆ. ಹೀಗೆ ನೀನು ನಿನ್ನ
ಹೆಸರನ್ನು ಆಶ್ಚರ್ಯಕರವನ್ನಾಗಿ ಮಾಡಿರುವೆ.

## ಸಹಾಯಕ್ಕಾಗಿ ದೇವರಿಗೆ ಪ್ರಾರ್ಥನೆ

15 ಯೆಹೋವನೇ, ಈಗ ನಡೆಯುವ ಸಂಗತಿಗಳನ್ನು
ಪರಲೋಕದಿಂದ ನೋಡು. ಪರಲೋಕದಲ್ಲಿ
ರುವ ನಿನ್ನ ಪವಿತ್ರಸ್ಥಾನದಿಂದ ನಮ್ಮನ್ನು ದೃಷ್ಟಿಸು.
ನಮ್ಮ ಮೇಲಿನ ಗಾಢವಾದ ಪ್ರೀತಿ ಎಲ್ಲಿದೆ? ನಿನ್ನ
ಅಂತರಂಗದೊಳಗಿಂದ ಬಂದ ಕಾರ್ಯಗಳೆಲ್ಲಿ?
ನನ್ನ ಮೇಲೆ ನಿನಗಿರುವ ಕರುಣೆ ಎಲ್ಲಿ? ನಿನ್ನ
ದಯಾಪರವಾದ ಪ್ರೀತಿಯನ್ನು ನನ್ನಿಂದ ಯಾಕೆ
ಅಡಗಿಸುವೆ?
16 ನೀನು ನಮ್ಮ ತಂದೆಯಾಗಿರುವೆ. ಅಬ್ರಹಾಮನಿಗೆ
ನಮ್ಮ ಪರಿಚಯವಿಲ್ಲ. ಇಸ್ರೇಲನು (ಯಾಕೋ
ಬನು) ನಮ್ಮನ್ನು ಗುರುತಿಸುವುದಿಲ್ಲ. ಯೆಹೋ
ವನೇ, ನೀನೇ ನಮ್ಮ ತಂದೆ. ನೀನೇ ನಮ್ಮನ್ನು
ಯಾವಾಗಲೂ ರಕ್ಷಿಸಿದಾತನು.
17 ಯೆಹೋವನೇ, ನೀನು ನಮ್ಮನ್ನು ನಿನ್ನಿಂದ ದೂರ
ಮಾಡುವೆ. ನಾವು ನಿನ್ನನ್ನು ಹಿಂಬಾಲಿಸ
ಬೇಕೆಂದರೂ ಹಾಗೆ ಆಗದಂತೆ ಅದನ್ನೇಕೆ ಕಷ್ಟಕರ
ವಾಗಿ ಮಾಡಿರುವೆ? ಯೆಹೋವನೇ, ನಮ್ಮ ಬಳಿಗೆ
ಹಿಂದಿರುಗಿ ಬಾ. ನಾವು ನಿನ್ನ ಸೇವಕರಾಗಿದ್ದೇವೆ.
ನಮ್ಮ ಬಳಿಗೆ ಬಂದು ಸಹಾಯ ಮಾಡು. ನಮ್ಮ
ಕುಟುಂಬಗಳು ನಿನ್ನವೇ.
18 ನಿನ್ನ ಪವಿತ್ರ ಜನರು ತಮ್ಮ ದೇಶದಲ್ಲಿ ಸ್ವಲ್ಪ ಕಾಲಕ್ಕೆ
ಮಾತ್ರ ವಾಸಿಸಿದರು. ಆಗ ನಮ್ಮ ಶತ್ರುಗಳು ಬಂದು
ನಿನ್ನ ಪವಿತ್ರ ಆಲಯದಲ್ಲಿ ತುಳಿದಾಡಿದರು.
19 ಕೆಲವರು ನಿನ್ನನ್ನು ಅನುಸರಿಸುವದಿಲ್ಲ. ಅವರು ನಿನ್ನ
ಹೆಸರಿನಿಂದ ಕರೆಯಲ್ಪಡುವದಿಲ್ಲ. ನಾವು ಅವರಂತೆ
ಇದ್ದೆವು.

64 ನೀನು ಆಕಾಶವನ್ನು ಹರಿದು ಕೆಳಗೆ ಭೂಮಿ
ಗಿಳಿದು ಬರುವದಾದರೆ ಎಲ್ಲವೂ ಬದಲಾ
ಗುವದು. ಪರ್ವತಗಳು ನಿನ್ನ ಎದುರು ಕರಗಿ
ಹೋಗುವವು.

2 ಒಣಎಲೆಯು ಸುಟ್ಟುಹೋಗುವಂತೆ ಪರ್ವತಗಳು
ಸುಟ್ಟು ಭಸ್ಮವಾಗುವವು. ಬೆಂಕಿಯಲ್ಲಿ ನೀರು
ಕುದಿಯುವಂತೆ ಪರ್ವತಗಳು ಕುದಿಯುವವು. ಆಗ
ನಿನ್ನ ಶತ್ರುಗಳು ನಿನ್ನ ವಿಷಯವಾಗಿ ತಿಳಿಯುವರು.
ಆಗ ಜನಾಂಗದವರೆಲ್ಲಾ ನಿನ್ನನ್ನು ನೋಡಿ ಭಯ
ದಿಂದ ನಡುಗುವರು.

3 ಆದರೆ ನೀನು ಹೀಗೆ ಮಾಡುವುದು ನಿಜವಾಗಿಯೂ ನಮಗಿಷ್ಟವಿಲ್ಲ. ಪರ್ವತಗಳು ನಿನ್ನೆದುರು ಕರಗಿ ಹೋದರೂ
4 ನಿನ್ನ ಜನರು ನಿನಗೆ ಕಿವಿಗೊಡಲಿಲ್ಲ. ನೀನು ಹೇಳಿದ್ದನ್ನು ನಿನ್ನ ಜನರು ನಿಜವಾಗಿಯೂ ಕೇಳಲಿಲ್ಲ. ನಿನ್ನಂಥ ದೇವರನ್ನು ಯಾರೂ ನೋಡಿಲ್ಲ. ನಿನ್ನ ಹೊರತು ಬೇರೆ ಯಾರೂ ದೇವರಿಲ್ಲ. ಜನರು ತಾಳ್ಮೆಯಿಂದಿದ್ದು ನಿನ್ನ ಸಹಾಯಕ್ಕಾಗಿ ಕಾದಿದ್ದರೆ. ನೀನು ಅವರಿಗಾಗಿ ಮಹಾ ಕಾರ್ಯಗಳನ್ನು ಮಾಡುವೆ.
5 ಒಳ್ಳೆಯದನ್ನು ಮಾಡುವವದರಲ್ಲಿ ಸಂತೋಷ ಪಡುವವರೊಂದಿಗೆ ನೀನಿರುವೆ. ಅವರು ನಿನ್ನ ಜೀವನದ ರೀತಿಗಳನ್ನು ನೆನಪಿನಲ್ಲಿಡುತ್ತಾರೆ. ಇಗೋ, ಗತಿಸಿದ ದಿವಸಗಳಲ್ಲಿ ನಾವು ನಿನಗೆ ವಿರುದ್ಧವಾಗಿ ಪಾಪ ಮಾಡಿದೆವು. ಆದುದರಿಂದ ನೀನು ನಮ್ಮ ಮೇಲೆ ಕೋಪಗೊಂಡೆ. ಈಗ ನಾವು ಹೇಗೆ ರಕ್ಷಿಸಲ್ಪಡುವೆವು?
6 ನಾವೆಲ್ಲರೂ ಪಾಪದಿಂದ ಮಲಿನರಾಗಿದ್ದೇವೆ. ನಮ್ಮ ಸುಕಾರ್ಯಗಳೆಲ್ಲಾ ಹಳೇ ಕೊಳಕು ಬಟ್ಟೆಯಂತಿವೆ. ನಾವೆಲ್ಲಾ ಒಣಗಿಹೋದ ಎಲೆಗಳಂತಿದ್ದೇವೆ. ನಮ್ಮ ಪಾಪಗಳು ನಮ್ಮನ್ನು ಒಣಗಿದ ಎಲೆಯಂತೆ ಗಾಳಿಯಲ್ಲಿ ಹಾರಿಸಿವೆ.
7 ನಿನ್ನ ಹೆಸರನ್ನು ಯಾರೂ ಕರೆಯುವದಿಲ್ಲ. ನಿನ್ನನ್ನು ಹಿಂಬಾಲಿಸಲು ಯಾರಿಗೂ ಇಷ್ಟವಿಲ್ಲ; ಯಾಕಂದರೆ ನೀನು ನಮಗೆ ವಿಮುಖನಾಗಿರುವೆ. ಮತ್ತು ನಮ್ಮನ್ನು ನಮ್ಮ ಪಾಪಗಳ ದೋಷಕ್ಕೆ ಒಪ್ಪಿಸಿ ಕೊಟ್ಟಿರುವೆ.
8 ಯೆಹೋವನೇ, ನೀನು ನಮ್ಮ ತಂದೆಯಾಗಿರುವೆ. ನಾವು ಜೇಡಿಮಣ್ಣಿನಂತಿದ್ದೇವೆ. ನೀನಾದರೊ ಕುಂಬಾರನಾಗಿರುವೆ. ನಿನ್ನ ಕೈಗಳು ನಮ್ಮನ್ನು ನಿರ್ಮಿಸಿದವು.
9 ಯೆಹೋವನೇ, ನಮ್ಮ ಮೇಲೆ ಸಿಟ್ಟಿನಿಂದಲೇ ಇರಬೇಡ. ನಮ್ಮ ಪಾಪಗಳನ್ನು ನಿನ್ನ ನೆನಪಿನಲ್ಲಿಟ್ಟುಕೊಂಡೇ ಇರಬೇಡ. ದಯಮಾಡಿ ನಮ್ಮ ಕಡೆಗೆ ನೋಡು. ನಾವು ನಿನ್ನ ಜನರೇ.
10 ನಿನ್ನ ಪವಿತ್ರ ಪಟ್ಟಣಗಳು ಜನಶೂನ್ಯವಾಗಿವೆ. ಆ ಪಟ್ಟಣಗಳು ಈಗ ಮರುಭೂಮಿಯಂತಿವೆ. ಚೀಯೋನು ಈಗ ಮರುಭೂಮಿಯಾಗಿದೆ. ಜೆರುಸಲೇಮ್ ನಿರ್ಜನವಾಗಿದೆ.
11 ನಮ್ಮ ಪವಿತ್ರ ಆಲಯವು ಬೆಂಕಿಯಿಂದ ಸುಡಲ್ಪಟ್ಟಿದೆ. ಆ ದೇವಾಲಯವು ನಮಗೆ ಅತ್ಯಂತ ಅಮೂಲ್ಯವಾದದ್ದಾಗಿದೆ. ನಮ್ಮ ಪೂರ್ವಿಕರು ನಿನ್ನನ್ನು ಅಲ್ಲಿ ಆರಾಧಿಸಿದರು. ನಾವು ಹೊಂದಿದಂಥ ಎಲ್ಲಾ ಒಳ್ಳೆಯವುಗಳು ಈಗ ನಾಶವಾದವು.
12 ನಮ್ಮ ಮೇಲೆ ನಿನ್ನ ಪ್ರೀತಿಯನ್ನು ತೋರಿಸಲು ಇವುಗಳು ಯಾವಾಗಲೂ ನಿನಗೆ ಅಡ್ಡಿ ಮಾಡುತ್ತವೋ? ನಮ್ಮೊಂದಿಗೆ ಮಾತನಾಡದೆ ಇನ್ನೂ ಇರುವಿಯೋ? ನಮ್ಮನ್ನು ಸದಾಕಾಲ ನೀನು ಶಿಕ್ಷಿಸುವಿಯೋ?

### ಜನರು ದೇವರ ಬಗ್ಗೆ ಜ್ಞಾನ ಹೊಂದುವರು

65 ಯೆಹೋವನು ಹೇಳುವದೇನೆಂದರೆ, ‘‘ನನ್ನ
ಆಲೋಚನೆಯನ್ನು ಕೇಳಲು ಬಾರದೆ ಹೋದ
ಜನರಿಗೂ ನಾನು ಸಹಾಯ ಮಾಡಿದೆನು. ನನ್ನನ್ನು
ಹುಡುಕದವರಿಗೂ ಸಿಕ್ಕಿದೆನು. ನನ್ನ ಹೆಸರನ್ನು ಧರಿಸದ
ಜನಾಂಗದೊಡನೆ ನಾನು ಮಾತನಾಡಿದೆನು. ಅವರಿಗೆ,
‘ನಾನಿಲ್ಲಿದ್ದೇನೆ! ನಾನಿಲ್ಲಿದ್ದೇನೆ!’ ಅಂದೆನು.
2‘‘ನನಗೆ ವಿರುದ್ಧವಾಗಿ ಎದ್ದವರನ್ನು ಸ್ವೀಕರಿಸಲು
ನಾನು ಸಿದ್ಧನಾಗಿ ನಿಂತೆನು. ಅವರು ನನ್ನ ಬಳಿಗೆ ಬರುತ್ತಾ
ರೆಂದು ಕಾಯುತ್ತಾ ನಿಂತುಕೊಂಡೆನು. ಆದರೆ ಅವರು
ಕೆಟ್ಟಜೀವಿತದಲ್ಲಿಯೇ ಮುಂದುವರಿದರು. ಅವರು
ತಮಗೆ ಇಷ್ಟಬಂದ ಹಾಗೆ ನಡೆದರು. 3ಅವರು ನನ್ನ
ಮುಂದೆ ಯಾವಾಗಲೂ ಇದ್ದು ನನ್ನನ್ನು ರೋಷ
ಗೊಳಿಸಿದರು. ಅವರು ತಮ್ಮ ವಿಶೇಷವಾದ ತೋಟಗಳಲ್ಲಿ
ಧೂಪಹಾಕಿ ಬಲಿಯರ್ಪಿಸಿದರು. 4ಅವರು ಸತ್ತವರಿಂದ
ಸಂದೇಶ ಪಡೆಯಲು ಸಮಾಧಿಗಳ ನಡುವೆ ಕುಳಿತು
ಕೊಳ್ಳುವರು. ಅವರು ಹೆಣಗಳೊಂದಿಗೂ ಸಹ ಜೀವಿಸು
ತ್ತಾರೆ. ಅವರು ಹಂದಿ ಮಾಂಸವನ್ನು ತಿನ್ನುತ್ತಾರೆ. ಅವರು
ತೆಗೆದುಕೊಳ್ಳುವ ಭಕ್ಷ್ಯಗಳು ಕೊಳೆತ ಮಾಂಸದಿಂದ
ಮಲಿನವಾಗಿವೆ.
5‘‘ಆದರೆ ಅವರು ಇತರರಿಗೆ, ‘ನನ್ನ ಬಳಿಗೆ ಬರಬೇಡ.
ನೀನು ನಿನ್ನನ್ನು ಶುದ್ಧಮಾಡುವ ತನಕ ನನ್ನನ್ನು
ಮುಟ್ಟದಿರು’ ಎಂದು ಹೇಳುವರು. ಅವರು ನನ್ನ ಕಣ್ಣಿನಲ್ಲಿ
ಹೊಗೆಯಂತಿದ್ದಾರೆ; ಅವರ ಬೆಂಕಿಯು ಸದಾ
ಉರಿಯುತ್ತಿರುವದು.’’

### ಇಸ್ರೇಲ್ ಶಿಕ್ಷಿಸಲ್ಪಡಲೇ ಬೇಕು

6‘‘ಇಗೋ! ನೀನು ಪಾವತಿ ಮಾಡಬೇಕಾದ ರಸೀದಿ
ಇಲ್ಲಿದೆ. ನೀನು ಅಪರಾಧಿ ಎಂದು ಈ ರಸೀದಿ ತೋರಿಸು
ತ್ತದೆ. ಈ ಚೀಟಿಯಲ್ಲಿ ಬರೆದ ಮೊತ್ತವನ್ನು ಕೊಡದೆ
ಸುಮ್ಮನಿರಲಾರೆ. ನಿನ್ನನ್ನು ಶಿಕ್ಷಿಸುವದರ ಮೂಲಕ ಈ
ಮೊತ್ತವನ್ನು ಕೊಟ್ಟು ಬಿಡುವೆನು.

7‘‘ನಿನ್ನ ಪಾಪಗಳೂ ನಿನ್ನ ಪಿತೃಗಳ ಪಾಪವೂ ಒಂದೇ
ಯಾಗಿವೆ. ಇದು ಯೆಹೋವನ ನುಡಿ. ನಿಮ್ಮ ಪೂರ್ವಿಕರು
ಬೆಟ್ಟಗಳ ಮೇಲೆ ಧೂಪಸುಟ್ಟು ಪಾಪಮಾಡಿದರು. ಅವರು
ಆ ಬೆಟ್ಟಗಳ ಮೇಲೆ ನನ್ನನ್ನು ಅವಮಾನಪಡಿಸಿದರು.
ಆದರೆ ನಾನು ಅವರನ್ನು ಮೊದಲು ಶಿಕ್ಷಿಸಿದೆನು. ಅವರಿಗೆ
ತಕ್ಕ ಶಿಕ್ಷೆಯನ್ನು ಕೊಟ್ಟೆನು.’’

### ದೇವರು ಇಸ್ರೇಲರನ್ನು ಸಂಪೂರ್ಣವಾಗಿ ನಾಶ ಮಾಡುವದಿಲ್ಲ

8ಯೆಹೋವನು ಹೇಳುವದೇನೆಂದರೆ: ‘‘ದ್ರಾಕ್ಷಿಹಣ್ಣಿ
ನಲ್ಲಿ ಹೊಸ ರಸವು ಇರುವಾಗ ಜನರು ಅದನ್ನು ಹಿಂಡಿ
ರಸವನ್ನು ತೆಗೆಯುವರು. ಯಾಕೆಂದರೆ ಆ ಹಣ್ಣನ್ನು ಮತ್ತೆ
ಉಪಯೋಗಿಸಬೇಕೆಂಬ ಉದ್ದೇಶದಿಂದ ಅದನ್ನು
ಸಂಪೂರ್ಣವಾಗಿ ಹಾಳು ಮಾಡುವದಿಲ್ಲ. ಅದೇ ರೀತಿ
ನಾನು ನನ್ನ ಸೇವಕರಿಗೂ ಮಾಡುವೆನು. ಅವರನ್ನು ನಾನು
ಸಂಪೂರ್ಣವಾಗಿ ನಾಶ ಮಾಡುವದಿಲ್ಲ. 9ನಾನು
ಯಾಕೋಬನ ಜನರಲ್ಲಿ ಕೆಲವರನ್ನು ಉಳಿಸುವೆನು.
ಯೆಹೂದದ ಕೆಲವರು ನನ್ನ ಪರ್ವತವನ್ನು ಪಡೆದು
ಕೊಳ್ಳುವರು. ನನ್ನ ಸೇವಕರು ಅಲ್ಲಿ ವಾಸಿಸುವರು. ಅಲ್ಲಿ
ವಾಸಿಸಬೇಕಾದವರನ್ನು ನಾನೇ ಆರಿಸಿಕೊಳ್ಳುವೆನು.
10ಆಗ ಶಾರೋನಿನ ಕಣಿವೆಯು ಕುರಿಗಳು ಮೇಯುವ
ಮೈದಾನವಾಗುವದು. ಆಕೋರಿನ ಕಣಿವೆಯು ದನಗಳು
ಮಲಗುವ ಸ್ಥಳವಾಗುವದು. ಇವೆಲ್ಲವೂ ನನ್ನ ಜನರಿ
ಗಾಗುವದು. ಇವರು ನನಗಾಗಿ ಹುಡುಕುತ್ತಿರುವರು.
11‘‘ಆದರೆ ನೀವು ಯೆಹೋವನನ್ನು ತೊರೆದಿರುವದ
ರಿಂದ ಶಿಕ್ಷಿಸಲ್ಪಡುವಿರಿ. ನೀವು ನನ್ನ ಪವಿತ್ರ ಪರ್ವತವನ್ನು
ಮರೆತುಬಿಟ್ಟಿದ್ದೀರಿ. ನೀವು ಅದೃಷ್ಟವನ್ನು ಪೂಜಿಸುತ್ತೀರಿ.
ನೀವು ಸುಳ್ಳುದೇವರ ಗತಿಯನ್ನು ಅವಲಂಬಿಸಿರುತ್ತೀರಿ.
12ಆದರೆ ನಿಮ್ಮ ಭವಿಷ್ಯವನ್ನು ನಾನು ತೀರ್ಮಾನಿಸುವೆನು.
ನೀವು ಖಡ್ಗದಿಂದ ಸಾಯುವಿರಿ ಎಂದು ನಾನು ತೀರ್ಮಾನಿ
ಸಿದ್ದೇನೆ. ನೀವೆಲ್ಲರೂ ಕೊಲ್ಲಲ್ಪಡುವಿರಿ. ಯಾಕೆಂದರೆ
ನಾನು ನಿಮ್ಮನ್ನು ಕರೆದಾಗ ನೀವು ಉತ್ತರ ಕೊಡಲಿಲ್ಲ.
ನಾನು ಮಾತನಾಡಿದಾಗ ನೀವು ಆಲಿಸಲಿಲ್ಲ. ನಾನು
ಕೆಟ್ಟದ್ದೆಂದು ಹೇಳಿದವುಗಳನ್ನು ನೀವು ಮಾಡಿದಿರಿ; ನನಗೆ
ಇಷ್ಟವಿಲ್ಲದ್ದನ್ನು ನೀವು ಮಾಡುತ್ತಿರುವಿರಿ.’’

13 ನನ್ನ ಒಡೆಯನಾದ ಯೆಹೋವನು ಈ ವಿಷಯ
ಗಳನ್ನು ಹೇಳಿದನು: ‘‘ನನ್ನ ಸೇವಕರು ಊಟ
ಮಾಡುವರು. ಆದರೆ ದುಷ್ಟ ಜನರಾದ ನೀವು ಹಸಿದ
ವರಾಗಿರುವಿರಿ. ನನ್ನ ಸೇವಕರು ಕುಡಿಯುವರು.
ಆದರೆ ದುಷ್ಟ ಜನರಾದ ನೀವು ಬಾಯಾರಿದ್ದೀರಿ.
ನನ್ನ ಸೇವಕರು ಸಂತೋಷದಲ್ಲಿರುವರು. ದುಷ್ಟ
ಜನರಾದ ನೀವಾದರೊ ನಾಚಿಕೆಗೆ ಒಳಗಾಗುವಿರಿ.
14 ನನ್ನ ಸೇವಕರ ಹೃದಯಗಳಲ್ಲಿ ಒಳ್ಳೆಯತನವಿದೆ.
ಆದುದರಿಂದ ಅವರು ಸಂತೋಷವಾಗಿದ್ದಾರೆ.
ದುಷ್ಟ ಜನರಾದ ನೀವಾದರೊ ಹೃದಯದ ಬೇನೆ
ಯಿಂದಾಗಿ ಅಳುವಿರಿ. ನಿಮ್ಮ ಆತ್ಮವು ಕುಂದಿ
ಹೋಗುವದು; ನೀವು ದುಃಖಕ್ರಾಂತರಾಗುವಿರಿ.
15 ನಿಮ್ಮ ಹೆಸರುಗಳು ನನ್ನ ಸೇವಕರಿಗೆ ಶಾಪವಾಗಿ
ಉಪಯೋಗಿಸಲ್ಪಡುತ್ತವೆ.’’ ನನ್ನ ಒಡೆಯನಾದ
ಯೆಹೋವನು ನಿಮ್ಮನ್ನು ಸಾಯಿಸುವನು. ಆತನು
ತನ್ನ ಸೇವಕರನ್ನು ಹೊಸ ಹೆಸರಿನಿಂದ
ಕರೆಯುವನು.
16 ಈಗ ಜನರು ಭೂಮಿಯಿಂದ ಆಶೀರ್ವಾದ ಕೇಳು
ತ್ತಾರೆ. ಆದರೆ ಮುಂದಿನ ದಿನಗಳಲ್ಲಿ ಅವರು
ನಂಬಿಗಸ್ತನಾದ ದೇವರಿಂದ ಆಶೀರ್ವಾದ ಕೇಳು
ವರು. ಈಗ ಜನರು ವಾಗ್ದಾನ ಮಾಡುವಾಗ
ಭೂಮಿಯ ಬಲದಲ್ಲಿ ಭರವಸವಿಡುವರು. ಆದರೆ
ಮುಂದಿನ ದಿನಗಳಲ್ಲಿ ನಂಬಿಗಸ್ತನಾದ ದೇವರ
ಮೇಲೆ ಭರವಸವಿಡುವರು. ಯಾಕೆಂದರೆ ಗತಿಸಿದ
ಸಂಕಟಗಳೆಲ್ಲವೂ ಮರೆತುಹೋಗುತ್ತವೆ. ಇವು
ಗಳು ನನ್ನ ಕಣ್ಣುಗಳಿಗೆ ಮರೆಯಾಗಿರುತ್ತವೆ.

### ಹೊಸ ಕಾಲ ಬರುತ್ತದೆ

17 ‘‘ನಾನು ಹೊಸ ಭೂಮ್ಯಾಕಾಶಗಳನ್ನು ಸೃಷ್ಟಿಸು
ವೆನು. ಜನರು ಗತಿಸಿದ ದಿನಗಳನ್ನು ತಮ್ಮ ನೆನಪಿಗೆ
ತರುವದಿಲ್ಲ. ಅವರು ಈ ಸಂಗತಿಗಳಲ್ಲಿ ಯಾವು
ದನ್ನೂ ಜ್ಞಾಪಿಸಿಕೊಳ್ಳುವದಿಲ್ಲ.
18 ನನ್ನ ಜನರು ಸಂತೋಷದಲ್ಲಿರುವರು. ಅವರು ನಿತ್ಯ
ಕಾಲಕ್ಕೂ ಹರ್ಷಿಸುವರು. ನಾನು ಜೆರುಸಲೇಮನ್ನು
ಸಂತಸದಿಂದ ತುಂಬಿಸುವೆನು. ಅವರನ್ನು
ಸಂತೋಷದ ಜನರನ್ನಾಗಿ ಮಾಡುವೆನು.
19 ‘‘ಆಗ ನಾನು ಜೆರುಸಲೇಮಿನ ವಿಷಯದಲ್ಲಿ
ಸಂತೋಷದಿಂದಿರುವೆನು. ನನ್ನ ಜನರ ವಿಷಯದ
ಲ್ಲಿಯೂ ಸಂತೋಷದಿಂದಿರುವೆನು. ಆ ಪಟ್ಟಣ
ದಲ್ಲಿ ಮತ್ತೆಂದಿಗೂ ರೋಧನವಿರದು, ದುಃಖ
ವಿರದು.
20 ಆ ಪಟ್ಟಣದಲ್ಲಿ ಹುಟ್ಟಿದ ಶಿಶುಗಳೆಲ್ಲಾ ಜೀವಿಸು
ವವು. ಯಾವ ಮಗುವೇ ಆಗಲಿ ಹುಟ್ಟಿದ ಕೂಡಲೇ
ಸಾಯುವದಿಲ್ಲ. ಆ ಪಟ್ಟಣದ ನಿವಾಸಿಗಳಲ್ಲಿ
ಯಾರೂ ಕಡಿಮೆ ಆಯುಷ್ಯದಿಂದ ಸಾಯುವದಿಲ್ಲ.
ಪ್ರತಿಯೊಂದು ಮಗುವೂ ದೀರ್ಘಾಯುಷ್ಯವನ್ನು
ಹೊಂದುವದು. ಪ್ರತಿಯೊಬ್ಬ ಯುವಕನೂ ಬಹಳ
ಕಾಲ ಜೀವಿಸುವನು. ಆಗ ನೂರು ವರ್ಷ

ಪ್ರಾಯದವನು ಸಹ ಯೌವನಸ್ಥನೆಂದು ಕರೆಯ
ಲ್ಪಡುವನು. ಒಬ್ಬನು ನೂರು ವರ್ಷವಾದರೂ
ಬಾಳದಿದ್ದರೆ ಜನರು ಅವನನ್ನು ಶಾಪ ಹೊಂದಿದವ
ನೆಂದು ಹೇಳುವರು.

21 ‘‘ಆ ಪಟ್ಟಣದೊಳಗೆ ಒಬ್ಬನು ಮನೆಯನ್ನು ಕಟ್ಟಿದರೆ
ಅದರಲ್ಲಿ ಅವನು ವಾಸಿಸುವನು. ಒಬ್ಬನು ದ್ರಾಕ್ಷಿ
ತೋಟವನ್ನು ನೆಟ್ಟರೆ ಅವನು ಅದರ ಫಲಗಳನ್ನು
ತಿನ್ನುವನು.
22 ಇನ್ನು ಮುಂದೆ ಯಾರಾದರೂ ಮನೆಯನ್ನು ಕಟ್ಟಿ
ದರೆ ಬೇರೆಯವರು ಅದನ್ನು ವಶಮಾಡಿಕೊಂಡು
ಅದರಲ್ಲಿ ವಾಸಿಸುವದಿಲ್ಲ. ಇನ್ನು ಮುಂದೆ ಯಾರಾ
ದರೂ ದ್ರಾಕ್ಷಾತೋಟವನ್ನು ಮಾಡಿದರೆ ಅದರ
ಫಲವನ್ನು ಇತರರು ತಿನ್ನುವದಿಲ್ಲ. ಮರಗಳು ಎಷ್ಟು
ಕಾಲ ಬೆಳೆಯುತ್ತದೋ ಅಷ್ಟು ಕಾಲ ನನ್ನ ಜನರು
ಜೀವಿಸುವರು. ನಾನು ಆರಿಸಿಕೊಂಡ ಜನರು ತಾವು
ಮಾಡಿದ ಕಾರ್ಯಗಳಲ್ಲಿ ಆನಂದಿಸುವರು.
23 ಇನ್ನು ಮುಂದೆ ಜನರು ಬಿಟ್ಟೀ ಕೆಲಸ ಮಾಡುವ
ದಿಲ್ಲ. ಇನ್ನು ಮುಂದೆ ಮಕ್ಕಳನ್ನು ಹೆರುವಾಗ
ಕೇಡಾಗುತ್ತದೆಯೆಂಬ ಭಯವಿರುವುದಿಲ್ಲ. ನನ್ನ
ಜನರೆಲ್ಲರೂ ಅವರ ಮಕ್ಕಳೂ ಯೆಹೋವನಿಂದ
ಆಶೀರ್ವದಿಸಲ್ಪಡುವರು.
24 ಅವರು ಕೇಳುವ ಮೊದಲೇ ಅವರಿಗೆ ಏನುಬೇಕು
ಎಂಬುದನ್ನು ಅರಿತುಕೊಳ್ಳುವೆನು. ಅವರ
ಪ್ರಾರ್ಥನೆ ಮುಗಿಯುವ ಮೊದಲೇ ಅವರಿಗೆ
ಸಹಾಯ ಮಾಡುವೆನು.
25 ತೋಳಗಳೂ ಕುರಿಮರಿಗಳೂ ಒಟ್ಟಾಗಿ ಮೇಯು
ವವು. ಸಿಂಹಗಳು ದನಕುರಿಗಳೊಂದಿಗೆ ಮೇಯು
ತ್ತವೆ. ನನ್ನ ಪವಿತ್ರ ಪರ್ವತದಲ್ಲಿ ವಿಷದ ಹಾವುಗಳು
ಯಾರಿಗೂ ಹಾನಿ ಮಾಡವು; ಭಯ ಹುಟ್ಟಿಸವು.’’
ಇವು ಯೆಹೋವನ ನುಡಿಗಳು.

## ದೇವರು ಎಲ್ಲಾ ಜನಾಂಗಗಳಿಗೆ ತೀರ್ಪು ಕೊಡುವನು

66 ಯೆಹೋವನು ಹೇಳುವದೇನಂದರೆ, ‘‘ಆಕಾ
ಶವೇ ನನ್ನ ಸಿಂಹಾಸನ, ಭೂಮಿಯೇ ನನ್ನ
ಪಾದಪೀಠ. ಹೀಗಿರಲು, ನೀವು ನನಗೊಂದು ಮನೆ
ಯನ್ನು ಕಟ್ಟಲು ಸಾಧ್ಯವೆಂದು ಯೋಚಿಸುವಿರಾ?
ಇಲ್ಲ, ಸಾಧ್ಯವಿಲ್ಲ! ವಿಶ್ರಮಿಸಿಕೊಳ್ಳಲು ನೀವು ಸ್ಥಳ
ಮಾಡುವಿರಾ? ಇಲ್ಲ, ಸಾಧ್ಯವಿಲ್ಲ!
2 ನಾನೇ ಎಲ್ಲವನ್ನು ಉಂಟುಮಾಡಿದೆನು. ನಾನು
ಸೃಷ್ಟಿಸಿದ್ದರಿಂದ ಅವು ಅಸ್ತಿತ್ವದಲ್ಲಿವೆ. ’’ಇವು
ಯೆಹೋವನ ನುಡಿಗಳು. ‘‘ಎಂಥ ಜನರನ್ನು
ನಾನು ಪರಿಪಾಲಿಸುತ್ತೇನೆಂದು ಕೇಳುವಿರಾ? ಬಡ
ವರ ವಿಷಯದಲ್ಲಿ ನಾನು ಚಿಂತಿಸುತ್ತೇನೆ. ದುಃಖಿ
ಸುವ ಜನರಿಗಾಗಿ ನಾನು ಚಿಂತಿಸುತ್ತೇನೆ. ನನ್ನ
ಮಾತುಗಳಿಗೆ ವಿಧೇಯರಾಗುವವರಿಗಾಗಿ ನಾನು
ಚಿಂತಿಸುತ್ತೇನೆ.
3 ಕೆಲವರು ಒಂದು ಕಡೆಯಲ್ಲಿ ಹೋರಿಯನ್ನು
ಯಜ್ಞಮಾಡುವರು. ಇನ್ನೊಂದು ಕಡೆಯಲ್ಲಿ ಜನ
ರಿಗೆ ಹಿಂಸೆ ಕೊಡುವರು. ಅವರು ಬಲಿಯರ್ಪಿಸಲು
ಕುರಿಗಳನ್ನು ಕೊಯ್ಯುವರು, ಅದೇ ಸಮಯದಲ್ಲಿ
ನಾಯಿಗಳ ಕುತ್ತಿಗೆಗಳನ್ನು ಮುರಿಯುವರು.
ಅವರು ನನಗೆ ಹಂದಿಗಳ ರಕ್ತವನ್ನು ಅರ್ಪಿಸುವರು.
ನನಗೆ ಧೂಪವನ್ನು ಹಾಕಲು ಯಾವಾಗಲೂ
ತಯಾರಿರುವರು. ಅದೇ ಸಮಯದಲ್ಲಿ ಅಯೋಗ್ಯ
ವಾದ ತಮ್ಮ ವಿಗ್ರಹಗಳನ್ನು ಪ್ರೀತಿಸುವರು. ಅವರು
ನನ್ನ ಮಾರ್ಗವನ್ನು ಅನುಸರಿಸದೆ ತಮ್ಮ ಮಾರ್ಗ
ವನ್ನು ಆರಿಸಿಕೊಳ್ಳುತ್ತಾರೆ. ಅವರು ತಮ್ಮ ಭಯಂಕ
ರವಾದ ವಿಗ್ರಹಗಳನ್ನು ಪೂಜಿಸುತ್ತಾರೆ.
4 ಆದುದರಿಂದ ನಾನು ಅವರ ಉಪಾಯಗಳನ್ನೇ
ಬಳಸಿಕೊಳ್ಳಲು ನಿರ್ಧರಿಸಿದೆನು. ಏನೆಂದರೆ ಅವರು
ಬಹು ಭಯಪಡುವ ವಸ್ತುಗಳಿಂದಲೇ ಅವರನ್ನು
ಶಿಕ್ಷಿಸಲು ತೀರ್ಮಾನಿಸಿದೆನು. ನಾನು ಅವರನ್ನು ಕರೆ
ದರೂ ಅವರು ಕಿವಿಗೊಡಲಿಲ್ಲ. ನಾನು ಅವ
ರೊಂದಿಗೆ ಮಾತಾಡಿದರೂ ಅವರು ಕೇಳಲಿಲ್ಲ.
ಆದುದರಿಂದ ನಾನು ಅವರಿಗೆ ಅದನ್ನೇ ಮಾಡು
ವೆನು. ನಾನು ಯಾವದನ್ನು ಕೆಟ್ಟದೆಂದು ಪರಿಗಣಿಸಿ
ದ್ದೆನೊ ಅದನ್ನೇ ಅವರು ಮಾಡಿದರು. ನಾನು ಇಷ್ಟ
ಪಡದ ಸಂಗತಿಗಳನ್ನು ಅವರು ಮಾಡಿದರು,’’

5 ಯೆಹೋವನ ಆಜ್ಞೆಗಳನ್ನು ಪರಿಪಾಲಿಸುವ ನೀವು
ಆತನು ಹೇಳುವ ಸಂಗತಿಗಳನ್ನು ಕಿವಿಗೊಟ್ಟು ಕೇಳ
ಬೇಕು. ಆತನು ಹೇಳುವದೇನೆಂದರೆ, ‘‘ನಿಮ್ಮ
ಸಹೋದರರು ನಿಮ್ಮನ್ನು ದ್ವೇಷಿಸಿದರು. ನೀವು
ನನ್ನನ್ನು ಅನುಸರಿಸಿದ್ದರಿಂದ ನಿಮ್ಮ ಮೇಲೆರಗಿ
ದರು. ‘ಯೆಹೋವನು ಸನ್ಮಾನ ಹೊಂದಿದ ಬಳಿಕ
ನಿಮ್ಮ ಬಳಿಗೆ ಬರುತ್ತೇವೆ. ಆಮೇಲೆ ನಿಮ್ಮ ಆನಂದ
ವನ್ನು ಅನುಭವಿಸುತ್ತೇವೆ’‘ ಎಂದು ನಿಮ್ಮ
ಸಹೋದರರು ಅಂದರು. ಆ ದುಷ್ಟ ಜನರು
ಶಿಕ್ಷಿಸಲ್ಪಡುವರು.

## ಶಿಕ್ಷೆ ಮತ್ತು ಹೊಸ ಜನಾಂಗ

6 ಆಲೈಸಿರಿ! ಪಟ್ಟಣದೊಳಗಿಂದ ಮತ್ತು ದೇವಾಲಯ

ದೊಳಗಿಂದ ದೊಡ್ಡ ಶಬ್ದವು ಕೇಳಿಸುತ್ತದೆ. ಯೆಹೋವನು
ತನ್ನ ವೈರಿಗಳನ್ನು ಶಿಕ್ಷಿಸುವುದೇ ಆ ಶಬ್ದ. ಅವರಿಗೆ ತಕ್ಕ
ಶಿಕ್ಷೆಯನ್ನು ಯೆಹೋವನು ಕೊಡುತ್ತಿದ್ದಾನೆ.

7-8 ''ಪ್ರಸವವೇದನೆಗಿಂತ ಮೊದಲು ಸ್ತ್ರೀಯು ಮಗು
ವನ್ನು ಹೆರುವದಿಲ್ಲ. ತಾನು ಹೆರುವ ಶಿಶುವನ್ನು ನೋಡುವ
ಮೊದಲು ಸ್ತ್ರೀಯು ಪ್ರಸವವೇದನೆ ಅನುಭವಿಸಲೇ
ಬೇಕು. ಅದೇ ರೀತಿಯಲ್ಲಿ ಒಂದೇ ದಿನದಲ್ಲಿ ಹೊಸ
ಭೂಮ್ಯಾಕಾಶಗಳು ಉಂಟಾಗುವದನ್ನು ಯಾರೂ
ನೋಡುವದಿಲ್ಲ. ಒಂದೇ ದಿವಸದಲ್ಲಿ ಉಂಟಾದ ಜನಾಂ
ಗದ ಬಗ್ಗೆ ಯಾರೂ ಕೇಳಲಿಲ್ಲ. ದೇಶವು ಪ್ರಸವವೇದನೆ
ಯಂಥ ಬೇನೆಯನ್ನು ಅನುಭವಿಸಬೇಕು. ಆ ಬಳಿಕ
ದೇಶವು ಹೊಸ ಜನಾಂಗವೆಂಬ ಮಕ್ಕಳನ್ನು ಹೆರುವುದು.
9 ಅದೇ ರೀತಿಯಲ್ಲಿ ಹೊಸದಾಗಿ ಹುಟ್ಟುವ ಕಾರಣ
ದಿಂದಲೇ ನಾನು ಬೇನೆಯನ್ನು ನಿಮಗೆ ಕೊಡುವೆನು.''

ಯೆಹೋವನು ಹೇಳುವದೇನೆಂದರೆ; ''ನಾನು ನಿಮಗೆ
ಹೆರಿಗೆ ಬೇನೆಯನ್ನು ಕೊಡದೆ ಹೋದರೆ ನೀವು ಹೊಸ
ಜನಾಂಗವಾಗಲಾರಿರಿ.'' ಇದು ಯೆಹೋವನ ನುಡಿ.

10 ಜೆರುಸಲೇಮೇ, ಹರ್ಷಿಸು. ಜೆರುಸಲೇಮನ್ನು
ಪ್ರೀತಿಸುವ ಜನರೇ, ಹರ್ಷಿಸಿರಿ. ಜೆರುಸಲೇಮಿಗೆ
ದುಃಖಕೊಡುವ ವಿಷಯಗಳು ಜರುಗಿದ್ದರಿಂದ
ನೀವು ದುಃಖಪಡುತ್ತಿದ್ದೀರಿ. ಆದರೆ ನೀವೀಗ
ಸಂತೋಷಪಡಬೇಕು.

11 ಯಾಕೆಂದರೆ ಆಕೆಯ ಎದೆಯಿಂದ ದೊರಕುವ
ಹಾಲಿನಂತೆ ನಿಮಗೆ ಕರುಣೆಯು ದೊರಕುವದು.
ಆ ಹಾಲು ನಿಮ್ಮನ್ನು ಪೂರ್ಣವಾಗಿ ತೃಪ್ತಿಗೊಳಿಸು
ವದು. ನೀವು ಆ ಹಾಲನ್ನು ಕುಡಿದು ಜೆರುಸ
ಲೇಮಿನ ವೈಭವದಲ್ಲಿ ಆನಂದಿಸುವಿರಿ.

12 ಯೆಹೋವನು ಹೇಳುವದೇನೆಂದರೆ: ''ಇಗೋ,
ನಾನು ನಿನಗೆ ಸಮಾಧಾನವನ್ನು ಕೊಡುತ್ತೇನೆ.
ಒಂದು ದೊಡ್ಡ ಹೊಳೆಯು ಹರಿಯುವಂತೆ ನಿನಗೆ
ಸಮಾಧಾನವು ಹರಿದುಕೊಂಡು ಬರುವದು.
ಭೂಮಿಯ ಮೇಲಿರುವ ಎಲ್ಲಾ ದೇಶಗಳ ಐಶ್ವ
ರ್ಯವು ನಿನ್ನ ಬಳಿಗೆ ಹರಿದುಬರುವದು. ಅದು
ಪ್ರವಾಹದಂತೆ ಹರಿದುಬರುವದು. ನೀವು ಸಣ್ಣ
ಮಕ್ಕಳಂತೆ ಆ ಹಾಲನ್ನು ಕುಡಿಯುವಿರಿ. ನಾನು
ನಿಮ್ಮನ್ನೆತ್ತಿ ಕೈಗಳಲ್ಲಿ ಅಪ್ಪಿಕೊಳ್ಳುವೆನು. ನನ್ನ
ತೊಡೆಯ ಮೇಲೆ ನಿಮ್ಮನ್ನು ಕುಳ್ಳಿರಿಸಿ ಆಟ
ವಾಡಿಸುವೆನು.

13 ನಾನು ನಿಮ್ಮನ್ನು ಜೆರುಸಲೇಮಿನಲ್ಲಿ ಸಂತೈಸುವೆನು.
ತಾಯಿಯು ತನ್ನ ಮಗುವನ್ನು ಸಂತೈಸುವಂತೆ ನಾನು
ನಿಮ್ಮನ್ನು ಸಂತೈಸುವೆನು.''

14 ನಿಮ್ಮನ್ನು ಹರ್ಷಗೊಳಿಸುವಂಥ ಸಂಗತಿಗಳನ್ನು
ನೀವು ನೋಡುವಿರಿ. ನೀವು ಸ್ವತಂತ್ರರಾಗಿದ್ದು
ಹುಲ್ಲಿನಂತೆ ಹುಲುಸಾಗಿ ಬೆಳೆಯುವಿರಿ. ಯೆಹೋ
ವನ ಸೇವಕರು ಆತನ ಶಕ್ತಿಯನ್ನು ನೋಡುವರು.
ಆದರೆ ಯೆಹೋವನ ವೈರಿಗಳು ಆತನ ಕೋಪವನ್ನು
ಕಾಣುವರು.

15 ಇಗೋ, ಯೆಹೋವನು ಬೆಂಕಿಯೊಂದಿಗೆ ಬರುತ್ತಿ
ದ್ದಾನೆ. ಯೆಹೋವನ ಸೈನ್ಯವು ಧೂಳಿನ ಮೋಡದೊಂದಿಗೆ
ಬರುತ್ತಿದೆ. ಯೆಹೋವನು ತನ್ನ ಕೋಪದಿಂದ ಆ
ಜನರನ್ನು ಶಿಕ್ಷಿಸುವನು. ಯೆಹೋವನು ಕೋಪದಲ್ಲಿರು
ವಾಗ ಬೆಂಕಿಯ ನಾಲಿಗೆಗಳಿಂದ ಅವರನ್ನು ಶಿಕ್ಷಿಸುತ್ತಾನೆ.
16 ಯೆಹೋವನು ಜನರಿಗೆ ನ್ಯಾಯತೀರ್ಪು ಮಾಡುವನು.
ಆ ಬಳಿಕ ಯೆಹೋವನು ಜನರನ್ನು ಬೆಂಕಿಯಿಂದಲೂ
ಖಡ್ಗದಿಂದಲೂ ನಾಶಮಾಡುವನು. ಯೆಹೋವನು
ಅನೇಕಾನೇಕ ಜನರನ್ನು ನಾಶಮಾಡುವನು.

17 ಅವರು ತಮ್ಮ ವಿಶೇಷವಾದ ತೋಟದೊಳಗೆ ಪೂಜೆ
ಮಾಡಲು ತಮ್ಮನ್ನು ಶುದ್ಧಮಾಡಿಕೊಳ್ಳುವಂತೆ ಸ್ನಾನ
ಮಾಡುವರು. ತಮ್ಮ ವಿಶೇಷ ತೋಟದೊಳಗೆ ಹೋಗಲು
ಒಬ್ಬರನ್ನೊಬ್ಬನು ಹಿಂಬಾಲಿಸುವರು. ಅಲ್ಲಿ ಅವರ ವಿಗ್ರಹ
ಗಳನ್ನು ಪೂಜಿಸುವರು. ಆದರೆ ಯೆಹೋವನು ಅವರೆಲ್ಲ
ರನ್ನು ನಾಶಮಾಡುವನು. ''ಆ ಜನರು ಹಂದಿ, ಇಲಿ ಮತ್ತು
ಇತರ ಅಶುದ್ಧ ಪ್ರಾಣಿಗಳ ಮಾಂಸವನ್ನು ತಿನ್ನುತ್ತಾರೆ.
ಆದರೆ ಅವರೆಲ್ಲರೂ ಒಟ್ಟಾಗಿ ನಾಶವಾಗುವರು.'' (ಇದು
ಯೆಹೋವನು ಹೇಳಿದ ಮಾತುಗಳು.)

18 ''ಆ ಜನರಲ್ಲಿ ಕೆಟ್ಟ ಯೋಜನೆಗಳು ಇದ್ದು ಕೆಟ್ಟದ್ದನ್ನೇ
ಮಾಡುವವರಾಗಿದ್ದಾರೆ. ಆದಕ್ಕಾಗಿ ನಾನು ಅವರನ್ನು
ಶಿಕ್ಷಿಸಲು ಬರುತ್ತಿದ್ದೇನೆ. ನಾನು ಎಲ್ಲಾ ಜನಾಂಗಗಳನ್ನೂ
ಎಲ್ಲಾ ಜನರನ್ನೂ ಒಟ್ಟುಗೂಡಿಸುವೆನು. ಎಲ್ಲಾ ಜನರು
ಒಟ್ಟುಗೂಡಿ ನನ್ನ ಸಾಮರ್ಥ್ಯವನ್ನು ನೋಡುವರು.
19 ಅವರಲ್ಲಿ ಕೆಲವರಿಗೆ ನಾನು ಗುರುತು ಹಾಕುವೆನು.
ನಾನು ಅವರನ್ನು ರಕ್ಷಿಸುವೆನು. ರಕ್ಷಿಸಲ್ಪಟ್ಟ ಕೆಲವರನ್ನು
ನಾನು ತಾರ್ಷೀಷ್, ಲಿಬ್ಯ, ಲೂದ್, ತೂಬಾಲ್, ಗ್ರೀಸ್
ಮತ್ತು ದೂರದೇಶಗಳಿಗೆ ಕಳುಹಿಸುವೆನು. ಅಲ್ಲಿಯ
ಜನರು ನನ್ನ ಬೋಧನೆಯನ್ನು ಎಂದೂ ಕೇಳಿರಲಿಲ್ಲ.
ಅವರು ನನ್ನ ಮಹಿಮೆಯನ್ನೂ ಕಂಡಿರಲಿಲ್ಲ. ಆದುದ
ರಿಂದ ರಕ್ಷಿಸಲ್ಪಟ್ಟ ಜನರು ನನ್ನ ಮಹಿಮೆಯನ್ನು ಅವರಿಗೆ
ತಿಳಿಸುವರು. 20 ಅವರು ನಿಮ್ಮ ಸಹೋದರ ಸಹೋದರಿ
ಯನ್ನು ಎಲ್ಲಾ ಜನಾಂಗಗಳೊಳಗಿಂದ ಕರೆದುಕೊಂಡು
ನನ್ನ ಪವಿತ್ರ ಪರ್ವತವಾದ ಜೆರುಸಲೇಮಿಗೆ ಬರುವರು.
ನಿನ್ನ ಸಹೋದರ ಸಹೋದರಿಯರು ಕುದುರೆ, ಕತ್ತೆ,
ಒಂಟೆ, ರಥ, ಮತ್ತು ಗಾಡಿಗಳಲ್ಲಿ ಕುಳಿತುಕೊಂಡು

ಬರುವರು. ಯೆಹೋವನ ಮಂದಿರದೊಳಗೆ ಶುದ್ಧವಾದ
ತಟ್ಟೆಯ ಮೇಲೆ ಕಾಣಿಕೆಗಳನ್ನು ತರುವಂತೆಯೇ ನಿನ್ನ
ಸಹೋದರ ಸಹೋದರಿಯರಾದ ಇಸ್ರೇಲರು ಬರು
ವರು. 21ನಾನು ಅವರಲ್ಲಿ ಕೆಲವರನ್ನು ಯಾಜಕರ
ನ್ನಾಗಿಯೂ ಲೇವಿಯರನ್ನಾಗಿಯೂ ಆರಿಸುವೆನು.'' ಇವು
ಯೆಹೋವನ ನುಡಿಗಳು.

### ಹೊಸ ಭೂಮ್ಯಾಕಾಶಗಳು

22''ನಾನು ಹೊಸ ಪ್ರಪಂಚವನ್ನು ಸೃಷ್ಟಿಸುವೆನು; ಹೊಸ
ಆಕಾಶವೂ ಹೊಸ ಭೂಮಿಯೂ ಶಾಶ್ವತವಾಗಿರುವವು.
ಹಾಗೆಯೇ ನಿಮ್ಮ ಹೆಸರುಗಳೂ ಯಾವಾಗಲೂ
ನನ್ನೊಂದಿಗೆ ಇರುತ್ತವೆ; ನಿಮ್ಮ ಮಕ್ಕಳೂ ನನ್ನೊಂದಿಗೆ
ಯಾವಾಗಲೂ ಇರುತ್ತಾರೆ. 23ಪ್ರತಿಯೊಂದು ಆರಾಧನಾ
ದಿನದಲ್ಲಿ ಪ್ರತಿಯೊಬ್ಬರೂ ಬಂದು ನನ್ನನ್ನು ಆರಾಧಿಸು
ವರು. ಪ್ರತಿಯೊಂದು ಸಬ್ಬತ್ ದಿನದಲ್ಲೂ ತಿಂಗಳ ಮೊದ
ಲನೇ ದಿನದಲ್ಲೂ ಅವರು ನನ್ನ ಬಳಿಗೆ ಬರುವರು.''

24''ಅವರು ನನ್ನ ಪವಿತ್ರ ಪಟ್ಟಣದಲ್ಲಿ ವಾಸಿಸುವರು.
ಅವರು ಪಟ್ಟಣದಿಂದ ಹೊರಗೆ ಹೋದರೆ ನನಗೆ ವಿರುದ್ಧ
ವಾಗಿ ಪಾಪ ಮಾಡಿದವರ ಹೆಣಗಳನ್ನು ನೋಡುವರು.
ಅವರ ಹೆಣಗಳೊಳಗೆ ಸಾಯದ ಹುಳಗಳಿರುವವು.
ಬೆಂಕಿಯು ಆ ಹೆಣಗಳನ್ನು ಸುಟ್ಟುಬಿಡುವುದು. ಆ
ಬೆಂಕಿಯು ಆರುವದೇ ಇಲ್ಲ.''

# ಯೆರೆಮೀಯ

1 ಇವು ಯೆರೆಮೀಯನ ಸಂದೇಶಗಳು. ಯೆರೆಮೀಯನು ಹಿಲ್ಕೀಯನೆಂಬುವನ ಮಗನು. ಯೆರೆಮೀಯನು ಅನಾತೋತ್ ನಗರದ ಯಾಜಕ ಕುಟುಂಬಕ್ಕೆ ಸೇರಿದವನಾಗಿದ್ದನು. ಆ ನಗರವು ಬೆನ್ಯಾಮೀನ್ಯರ ಪ್ರದೇಶದಲ್ಲಿತ್ತು.
2 ಯೆಹೂದದಲ್ಲಿ ಯೋಷೀಯನ ಆಳ್ವಿಕೆಯ ಕಾಲದಲ್ಲಿ ಯೆಹೋವನು ಯೆರೆಮೀಯನೊಂದಿಗೆ ಮಾತನಾಡಲು ಪ್ರಾರಂಭಿಸಿದನು. ಯೋಷೀಯನು ಆಮೋನನೆಂಬುವನ ಮಗನಾಗಿದ್ದನು. ಯೋಷೀಯನ ಆಳ್ವಿಕೆಯ ಹದಿಮೂರನೆಯ ವರ್ಷದಲ್ಲಿ ಯೆಹೋವನು ಯೆರೆಮೀಯನೊಂದಿಗೆ ಮಾತನಾಡಲು ಪ್ರಾರಂಭಿಸಿದನು.
3 ಯೆಹೋಯಾಕೀಮನು ಯೆಹೂದದಲ್ಲಿ ಆಳುವಾಗಲೂ ಯೆಹೋವನು ಯೆರೆಮೀಯನೊಂದಿಗೆ ಮಾತನಾಡುವದನ್ನು ಮುಂದುವರೆಸಿದನು. ಯೆಹೋಯಾಕೀಮನು ಯೋಷೀಯನ ಮಗನು. ಯೆಹೂದದಲ್ಲಿ ಚಿದ್ಕೀಯನು ಆಳಿದ ಹನ್ನೊಂದು ವರ್ಷ ಐದು ತಿಂಗಳ ಕಾಲ ಯೆಹೋವನು ಯೆರೆಮೀಯನೊಂದಿಗೆ ಮಾತನಾಡುವದನ್ನು ಮುಂದುವರೆಸಿದನು. ಚಿದ್ಕೀಯನು ಸಹ ಯೋಷೀಯನ ಮಗನಾಗಿದ್ದನು. ಚಿದ್ಕೀಯನ ಆಳ್ವಿಕೆಯ ಹನ್ನೊಂದನೇ ವರ್ಷದ ಐದನೆಯ ತಿಂಗಳಿನಲ್ಲಿ ಜೆರುಸಲೇಮಿನ ನಿವಾಸಿಗಳು ಸೆರೆ ಒಯ್ಯಲ್ಪಟ್ಟರು.

### ಯೆಹೋವನು ಯೆರೆಮೀಯನನ್ನು ಕರೆದನು

4 ಯೆರೆಮೀಯನಿಗೆ ಯೆಹೋವನ ಈ ಸಂದೇಶ ಬಂದಿತು:

5 ‘‘ನಾನು ನಿನ್ನನ್ನು ನಿನ್ನ ತಾಯಿಯ ಗರ್ಭದಲ್ಲಿ ರೂಪಿಸುವ ಮುಂಚೆಯೇ ನಿನ್ನನ್ನು ಬಲ್ಲವನಾಗಿದ್ದೆನು.
ನೀನು ಹುಟ್ಟುವದಕ್ಕಿಂತ ಮುಂಚೆಯೇ ನಾನು ನಿನ್ನನ್ನು ಒಂದು ವಿಶೇಷವಾದ ಕೆಲಸಕ್ಕೆ ಅಂದರೆ ಜನಾಂಗಗಳಿಗೆ ಪ್ರವಾದಿಯನ್ನಾಗಿ ಆರಿಸಿಕೊಂಡಿದ್ದೆನು.’’

6 ಆಗ ಯೆರೆಮೀಯನೆಂಬ ನಾನು, ‘‘ಸರ್ವಶಕ್ತನಾದ ಯೆಹೋವನೇ, ಹೇಗೆ ಮಾತನಾಡಬೇಕೆಂಬುದೇ, ನನಗೆ ತಿಳಿಯದು. ನಾನು ಕೇವಲ ಯುವಕನಷ್ಟೇ’’ ಎಂದು ಹೇಳಿದೆ.

7 ಆದರೆ ಯೆಹೋವನು ನನಗೆ,

‘‘ನಾನು ಕೇವಲ ಯುವಕನೆಂದು ಹೇಳಬೇಡ,
ನಾನು ಕಳುಹಿಸುವ ಸ್ಥಳಗಳಿಗೆ ನೀನು ಹೋಗಬೇಕು. ನಾನು ಹೇಳು ಅಂದದ್ದನ್ನೆಲ್ಲ ನೀನು ಹೇಳಬೇಕು.
8 ಯಾರಿಗೂ ನೀನು ಹೆದರಬೇಡ, ನಾನೇ ನಿನ್ನ ಜೊತೆ ಇದ್ದೇನೆ. ನಾನು ನಿನ್ನನ್ನು ಕಾಪಾಡುತ್ತೇನೆ.
ಈ ಮಾತನ್ನು ಯೆಹೋವನಾದ ನಾನೇ ಹೇಳುತ್ತಿದ್ದೇನೆ’’ ಎಂದನು.

9 ಆಗ ಯೆಹೋವನು ಕೈಚಾಚಿ ನನ್ನ ಬಾಯಿಯನ್ನು ಮುಟ್ಟಿ,

‘‘ಯೆರೆಮೀಯನೇ, ನಾನು ನನ್ನ ಮಾತುಗಳನ್ನು ನಿನ್ನ ಬಾಯಲ್ಲಿ ಇಡುತ್ತಿದ್ದೇನೆ.
10 ಕಿತ್ತು ಹಾಕಲು, ಕೆಡವಲು, ನಾಶಪಡಿಸಲು, ಹಾಳುಮಾಡಲು, ಕಟ್ಟಲು, ನೆಡಲು, ಜನಾಂಗಗಳ ಮೇಲೂ ರಾಜ್ಯಗಳ ಮೇಲೂ ನಿನ್ನನ್ನು ಈ ದಿನ ನೇಮಿಸಿದ್ದೇನೆ’’ ಅಂದನು.

### ಎರಡು ಕಾಣ್ಕೆಗಳು

11 ಯೆಹೋವನಿಂದ ನನಗೆ ಈ ಸಂದೇಶ ಬಂದಿತು! ‘‘ಯೆರೆಮೀಯನೇ ನಿನಗೆ ಏನು ಕಾಣುತ್ತಿದೆ?’’ ಎಂದು ಯೆಹೋವನು ಕೇಳಿದನು.

ನಾನು ಆತನಿಗೆ, ‘‘ಬಾದಾಮಿಯ ಮರದಿಂದ ಮಾಡಿದ ಒಂದು ದಂಡ ಕಾಣಿಸುತ್ತಿದೆ’’ ಎಂದು ಉತ್ತರ ಕೊಟ್ಟೆನು.

12 ಆಗ ಯೆಹೋವನು, ‘‘ನೀನು ಸರಿಯಾಗಿ ನೋಡಿರುವೆ, ನನ್ನ ಮಾತನ್ನು ನೆರವೇರಿಸಲು ಎಚ್ಚರಗೊಂಡಿದ್ದೇನೆ’’ ಎಂದು ತಿಳಿದುಕೋ ಎಂಬುದಾಗಿ ಹೇಳಿದನು.

13ಇನ್ನೊಂದು ಸಲ ಯೆಹೋವನು, ''ನಿನಗೆ ಏನು
ಕಾಣುತ್ತಿದೆ?'' ಎಂದು ಕೇಳಿದನು. ನಾನು ಯೆಹೋವ
ನಿಗೆ, ''ಕುದಿಯುವ ನೀರಿನ ಒಂದು ಹಂಡೆ ಕಾಣುತ್ತಿದೆ.
ಆ ಹಂಡೆಯು ಉತ್ತರದಿಂದ ಈ ಕಡೆಗೆ ಬಾಗಿಕೊಂಡಿದೆ''
ಎಂದು ಉತ್ತರಿಸಿದೆನು.

14 ಯೆಹೋವನು ನನಗೆ, ''ಉತ್ತರ ದಿಕ್ಕಿನಿಂದ ಈ
ದೇಶದ ನಿವಾಸಿಗಳೆಲ್ಲರ ಮೇಲೆ ಒಂದು ಕೇಡು
ಬರುವದು.
15 ಸ್ವಲ್ಪ ಸಮಯದಲ್ಲಿಯೇ ನಾನು ಉತ್ತರ ರಾಜ್ಯಗಳ
ಎಲ್ಲಾ ಜನರನ್ನು ಕರೆಯುತ್ತೇನೆ'' ಎಂದನು. ಮತ್ತೆ
ಯೆಹೋವನು ಹೀಗೆ ಹೇಳಿದನು: ''ಆ ದೇಶಗಳ
ರಾಜರು ಬರುವರು. ಅವರು ಜೆರುಸಲೇಮಿನ
ಹೆಬ್ಬಾಗಿಲಿನ ಹತ್ತಿರ ತಮ್ಮ ಆಸನಗಳನ್ನು ಹಾಕು
ವರು. ಅವರು ಜೆರುಸಲೇಮಿನ ಎಲ್ಲಾ ಕೋಟೆ
ಗೋಡೆಗಳಿಗೆ ಮುತ್ತಿಗೆಹಾಕುವರು. ಅವರು
ಯೆಹೂದ ಪ್ರದೇಶದ ಎಲ್ಲಾ ನಗರಗಳ ಮೇಲೆ
ಧಾಳಿ ಮಾಡುವರು.
16 ನಾನು ನನ್ನ ಜನರ ವಿರುದ್ಧ ನನ್ನ ನ್ಯಾಯ
ನಿರ್ಣಯವನ್ನು ಘೋಷಿಸುವೆನು. ಅವರು ಕೆಟ್ಟ
ಜನರು, ಅವರು ನನ್ನ ವಿರೋಧಿಗಳಾಗಿದ್ದಾರೆ. ನನ್ನ
ಜನರು ನನ್ನನ್ನು ತ್ಯಜಿಸಿದ್ದಾರೆ. ಅವರು ನನ್ನನ್ನು
ಹೇಗೆ ತ್ಯಜಿಸಿದರು? ಅವರು ಅನ್ಯದೇವರುಗಳಿಗೆ
ಹೋಮ ಮಾಡಿದರು. ಅವರು ತಮ್ಮ ಕೈಗ
ಳಿಂದಲೇ ಮಾಡಿದ ವಿಗ್ರಹಗಳನ್ನು ಪೂಜಿಸಿದರು.
17 ''ಯೆರೆಮೀಯನೇ, ಸಿದ್ಧನಾಗು! ಎದ್ದು ನಿಲ್ಲು!
ನಾನು ಹೇಳಿದ್ದೆಲ್ಲವನ್ನು ಜನರಿಗೆ ಹೇಳು. ಅವರಿಗೆ
ಹೆದರಬೇಡ. ನೀನು ಅವರಿಗೆ ಹೆದರಿಕೊಂಡರೆ,
ನಾನು ನಿನ್ನನ್ನು ಅವರೆದುರಿನಲ್ಲಿ ಹೆದರಿಸುವೆನು.
18 ನೀನು ನನ್ನ ವಿಷಯವಾಗಿ ಹೇಳಬೇಕು. ನಾನು
ನಿನ್ನನ್ನು ಭದ್ರವಾದ ನಗರವನ್ನಾಗಿಯೂ ಕಬ್ಬಿಣದ
ಕಂಬವನ್ನಾಗಿಯೂ ಕಂಚಿನ ಗೋಡೆಯ
ನ್ನಾಗಿಯೂ ಮಾಡುತ್ತೇನೆ. ನೀನು ದೇಶದಲ್ಲಿ ಎಲ್ಲ
ರಿಗೂ ಎದುರಾಗಿ ನಿಲ್ಲಬಹುದು, ಯೆಹೂದ
ದೇಶದ ರಾಜರ ವಿರುದ್ಧವಾಗಿಯೂ ಯೆಹೂದದ
ನಾಯಕರ ವಿರುದ್ಧವಾಗಿಯೂ ಯೆಹೂದದ
ಯಾಜಕರ ವಿರುದ್ಧವಾಗಿಯೂ ಯೆಹೂದ
ದೇಶದ ಜನರ ವಿರುದ್ಧವಾಗಿಯೂ ನೀನು
ನಿಲ್ಲುವೆ.
19 ಆ ಜನರೆಲ್ಲಾ ನಿನ್ನ ವಿರುದ್ಧ ಹೋರಾಡುವರು,
ಆದರೆ ಅವರು ನಿನ್ನನ್ನು ಸೋಲಿಸಲಾಗುವದಿಲ್ಲ.
ಏಕೆಂದರೆ ನಾನೇ ನಿನ್ನೊಂದಿಗೆ ಇರುವೆನು. ನಾನೇ
ನಿನ್ನನ್ನು ರಕ್ಷಿಸುವೆನು.'' ಇದು ಯೆಹೋವನಾದ
ನನ್ನ ಮಾತು.

2 ಯೆಹೋವನ ಈ ಸಂದೇಶವು ಯೆರೆಮೀಯನಿಗೆ
ಬಂದಿತು: 2''ಯೆರೆಮೀಯನೇ, ಹೋಗಿ ಜೆರುಸ
ಲೇಮಿನ ಜನರೊಂದಿಗೆ ಮಾತನಾಡು. ಅವರಿಗೆ ಹೀಗೆ
ಹೇಳು:

''ಯೆಹೋವನು ಹೀಗನ್ನುತ್ತಾನೆ: 'ನೀವು ಯುವ
ರಾಷ್ಟ್ರವಾಗಿದ್ದಾಗ ನನಗೆ ನಂಬಿಗಸ್ತರಾಗಿದ್ದಿರಿ;
ಯುವತಿಯಾದ ಮದುಮಗಳಂತೆ ನನ್ನನ್ನು
ಹಿಂಬಾಲಿಸಿದಿರಿ. ಎಂದೂ ಬೇಸಾಯಕ್ಕೆ ಬಳಸದ
ಭೂಮಿಯಲ್ಲಿಯೂ ಮರಳುಗಾಡಿನಲ್ಲಿಯೂ
ನನ್ನನ್ನು ಹಿಂಬಾಲಿಸಿದಿರಿ.
3 ಇಸ್ರೇಲಿನ ಜನರು ಯೆಹೋವನಿಗೆ ಒಂದು ಪವಿತ್ರ
ವಾದ ಕಾಣಿಕೆಯಾಗಿದ್ದರು. ಅವರು ಯೆಹೋವನ
ಬೆಳೆಯ ಪ್ರಥಮ ಫಲವಾಗಿದ್ದರು. ಇಸ್ರೇಲಿನ
ಜನರನ್ನು ಪೀಡಿಸಲು ಪ್ರಯತ್ನಿಸಿದವರನ್ನು
ಯಾರಾದರೂ ಆಗಿರಲಿ, ದೋಷಿಗಳೆಂದು
ನಿರ್ಣಯಿಸಲಾಗುತ್ತಿತ್ತು. ಆ ಕೆಟ್ಟ ಜನರಿಗೆ ಕೇಡಾ
ಗುತ್ತಿತ್ತು.''' ಇದು ಯೆಹೋವನ ಸಂದೇಶ.
4 ಯಾಕೋಬನ ಮನೆತನದವರೇ, ಯೆಹೋವನ
ಸಂದೇಶವನ್ನು ಕೇಳಿರಿ. ಇಸ್ರೇಲಿನ ಎಲ್ಲಾ ಕುಲದ
ವರೇ, ಯೆಹೋವನ ಸಂದೇಶವನ್ನು ಕೇಳಿರಿ.
5 ಯೆಹೋವನು ಹೀಗೆನ್ನುತ್ತಾನೆ: ''ನಾನು ನಿಮ್ಮ
ಪೂರ್ವಿಕರಿಗೆ ಅನ್ಯಾಯ ಮಾಡಿದೆನೇ? ಅದಕ್ಕಾಗಿ
ಅವರು ನನ್ನನ್ನು ತಿರಸ್ಕರಿಸಿದರೇ? ನಿಮ್ಮ ಪೂರ್ವಿ
ಕರು ನಿಷ್ಪ್ರಯೋಜಕವಾದ ವಿಗ್ರಹಗಳನ್ನು ಪೂಜಿಸಿ
ತಾವು ಸಹ ನಿಷ್ಪ್ರಯೋಜಕರಾದರು.

6 'ಈಜಿಪ್ಟಿನಿಂದ ನಮ್ಮನ್ನು ಕರೆದುಕೊಂಡು ಬಂದ
ಯೆಹೋವನು ಎಲ್ಲಿದ್ದಾನೆ? ಮರಳುಗಾಡಿನಿಂದ
ನಮ್ಮನ್ನು ಕರೆದುಕೊಂಡು ಬಂದ ಯೆಹೋವನು
ಎಲ್ಲಿದ್ದಾನೆ? ನಿರ್ಜನವಾದ ಬೆಟ್ಟಪ್ರದೇಶದಿಂದ
ನಮ್ಮನ್ನು ತಂದ ಯೆಹೋವನು ಎಲ್ಲಿದ್ದಾನೆ?
ಎಂದು ನಿಮ್ಮ ಪೂರ್ವಿಕರು ಸ್ಮರಿಸಲಿಲ್ಲ.
ಯೆಹೋವನು ನಮ್ಮನ್ನು ಅಂಧಕಾರಮಯವಾದ
ಮತ್ತು ಅಪಾಯಕಾರಿಯಾದ ಭೂಮಿಯಿಂದ
ಕರೆದುತಂದನು. ಆ ಭೂಮಿಯ ಮಾರ್ಗವಾಗಿ
ಯಾರೂ ಪ್ರಯಾಣ ಮಾಡುವುದಿಲ್ಲ. ಯಾರೂ
ಆ ಭೂಮಿಯ ಮೇಲೆ ವಾಸ ಮಾಡುವದಿಲ್ಲ. ಈಗ
ಆ ಯೆಹೋವನು ಎಲ್ಲಿದ್ದಾನೆ?''' ನಿಮ್ಮ ಪೂರ್ವಿ
ಕರು ಆ ಪ್ರಶ್ನೆಗಳನ್ನು ಕೇಳಲೇ ಇಲ್ಲ.

7 ‘‘ನಾನು ನಿಮ್ಮನ್ನು ಅನೇಕ ಅಮೂಲ್ಯ ವಸ್ತುಗಳಿಂದ ಕೂಡಿದ ಫಲವತ್ತಾದ ಭೂಮಿಗೆ ಕರೆದುತಂದೆ. ಅಲ್ಲಿ ಬೆಳೆಯುವ ಫಲಗಳನ್ನು ತಿನ್ನಲಿ ಎಂಬ ಉದ್ದೇಶದಿಂದ ನಾನು ಕರೆದುತಂದೆ. ಆದರೆ ನೀವು ಬಂದು ನನ್ನ ಭೂಮಿಯನ್ನು ಹೊಲಸು ಮಾಡಿದಿರಿ. ನಾನು ಆ ಭೂಮಿಯನ್ನು ನಿಮಗೆ ಕೊಟ್ಟೆ ಆದರೆ ನೀವು ಅದನ್ನು ಕೆಟ್ಟ ಸ್ಥಳವನ್ನಾಗಿ ಮಾಡಿದಿರಿ.

8 ‘‘‘ಯೆಹೋವನು ಎಲ್ಲಿ?’ ಎಂದು ಯಾಜಕರು ಕೇಳಲಿಲ್ಲ. ಧರ್ಮಶಾಸ್ತ್ರವನ್ನು ಬಲ್ಲವರು ನನ್ನನ್ನು ತಿಳಿಯಬಯಸಲಿಲ್ಲ. ಇಸ್ರೇಲರ ಜನನಾಯಕರು ನನ್ನ ವಿರೋಧಿಗಳಾದರು. ಪ್ರವಾದಿಗಳು ಸುಳ್ಳು ದೇವರಾದ ಬಾಳನ ಹೆಸರಿನಿಂದ ಭವಿಷ್ಯ ವಾಣಿಯನ್ನು ನುಡಿದರು. ಅವರು ನಿಷ್ಪ್ರಯೋಜಕವಾದ ವಿಗ್ರಹಗಳನ್ನು ಪೂಜಿಸಿದರು.’’

9 ‘‘ಆದುದರಿಂದ ನಾನು ನಿಮ್ಮನ್ನು ಮತ್ತೊಮ್ಮೆ ಆಪಾದಿಸುವೆನು. ನಾನು ನಿಮ್ಮ ಮೊಮ್ಮಕ್ಕಳ ಮೇಲೂ ಆಪಾದಿಸುವೆನು’’ ಎನ್ನುತ್ತಾನೆ ಯೆಹೋವನು.

10 ಸಮುದ್ರದ ಆಚೆಗಿದ್ದ ಕಿತ್ತೀಮ್ ದ್ವೀಪಗಳಿಗೆ ಹೋಗಿ ನೋಡಿರಿ. ಸೂಕ್ಷ್ಮವಾಗಿ ಪರಿಶೀಲಿಸಲು ಯಾರನ್ನಾದರೂ ಕೇದಾರಿಗೆ ಕಳುಹಿಸಿರಿ. ಯಾರಾದರೂ ಎಂದಾದರೂ ಇಂಥ ಕೆಲಸ ಮಾಡಿರುವರೇ ನೋಡಿರಿ.

11 ಯಾವ ಜನಾಂಗವಾದರೂ ಎಂದಾದರೂ ತಮ್ಮ ಹಳೆಯ ದೇವರುಗಳನ್ನು ಬದಲಾಯಿಸಿ ಹೊಸ ದೇವರುಗಳನ್ನು ಪಡೆಯಿತೇ? ಇಲ್ಲ. (ಅವರ ದೇವರುಗಳು ನಿಜವಾದ ದೇವರುಗಳೇ ಅಲ್ಲ.) ಆದರೆ ನನ್ನ ಜನರು ತಮ್ಮ ಮಹಿಮಾ ಶಾಲಿಯಾದ ದೇವರನ್ನು ಅಪ್ರಯೋಜಕವಾದ ವಿಗ್ರಹಗಳೊಂದಿಗೆ ಬದಲಾಯಿಸಿಕೊಂಡಿದ್ದಾರೆ.

12 ‘‘ಆಕಾಶಮಂಡಲವೇ, ನಡೆದ ಸಂಗತಿಗಳಿಗಾಗಿ ಬೆಚ್ಚಿಬೆರಗಾಗು! ಭಯದಿಂದ ನಡುಗು!’’ ಎಂದು ಯೆಹೋವನು ನುಡಿಯುತ್ತಾನೆ.

13 ‘‘ನನ್ನ ಜನರು ಎರಡು ಅಪರಾಧಗಳನ್ನು ಮಾಡಿದ್ದಾರೆ. ಅವರು ನನ್ನಿಂದ ಮುಖ ತಿರುವಿದ್ದಾರೆ. ನಾನು ಜೀವಜಲದ ಬುಗ್ಗೆಯಾಗಿದ್ದೇನೆ. ಅವರು ತಮ್ಮದೇ ಆದ ನೀರಿನ ತೊಟ್ಟಿಗಳನ್ನು ನಿರ್ಮಿಸಿಕೊಂಡಿದ್ದಾರೆ. ಅವರು ಇತರ ದೇವರುಗಳ ಕಡೆಗೆ ತಿರುಗಿಕೊಂಡಿದ್ದಾರೆ. ಅವರ ತೊಟ್ಟಿಗಳು ಒಡೆದಿವೆ. ಅವುಗಳಲ್ಲಿ ನೀರು ತುಂಬಿಡಲು ಸಾಧ್ಯವಿಲ್ಲ.

14 ‘‘ಇಸ್ರೇಲಿನ ಜನರು ಗುಲಾಮರಾಗಿರುವರೇ? ಅವರು ಗುಲಾಮರಾಗಿ ಹುಟ್ಟಿದ ಮನುಷ್ಯನಂತಿರುವರೇ? ಬೇರೆಯವರು ಇಸ್ರೇಲರ ಸಂಪತ್ತನ್ನು ಏಕೆ ತೆಗೆದುಕೊಂಡರು?

15 ಪ್ರಾಯದಸಿಂಹಗಳು (ವೈರಿಗಳು) ಇಸ್ರೇಲ್ ಜನಾಂಗದ ಮೇಲೆ ಗರ್ಜಿಸುತ್ತಿವೆ. ಆ ಸಿಂಹಗಳು ಆರ್ಭಟಿಸುತ್ತಿವೆ; ಇಸ್ರೇಲರ ನಾಡನ್ನು ನಾಶ ಮಾಡಿವೆ. ಇಸ್ರೇಲ್‌ನ ನಗರಗಳು ಸುಡಲ್ಪಟ್ಟಿವೆ; ಅವುಗಳು ನಿರ್ಜನವಾಗಿವೆ.

16 ಮೆಂಫೀಸ್ ಮತ್ತು ತಪನೇಸ್* ನಗರಗಳ ಜನರು ನಿನ್ನ ತಲೆ ಬುರುಡೆಯನ್ನು ಒಡೆದುಬಿಟ್ಟಿದ್ದಾರೆ.

17 ತೊಂದರೆಯು ನಿನ್ನ ತಪ್ಪಿನ ಫಲ. ನಿನ್ನನ್ನು ಸರಿಯಾದ ಮಾರ್ಗದಲ್ಲಿ ನಡೆಸುತ್ತಿದ್ದ ನಿನ್ನ ಯೆಹೋವನಾದ ದೇವರಿಗೆ ನೀನು ವಿಮುಖನಾದೆ.

18 ಯೆಹೂದದ ಜನರೇ, ಅದರ ಬಗ್ಗೆ ಯೋಚಿಸಿರಿ. ಇದರಿಂದ ನಿಮಗೆ ಈಜಿಪ್ಟಿಗೆ ಹೋಗಲು ಸಹಾಯವಾಯಿತೇ? ನೈಲ್ ನದಿಯ ನೀರನ್ನು ಕುಡಿಯಲು ಈಜಿಪ್ಟಿಗೆ ಹೋಗುವುದೇಕೆ?* ಅವರ ನದಿಯ ನೀರನ್ನು ಕುಡಿಯಲು ಅಸ್ಸೀರಿಯಕ್ಕೆ ಹೋಗುವುದೇಕೆ?

19 ನೀವು ಕೆಟ್ಟದ್ದನ್ನು ಮಾಡಿದರೆ ಆ ಕೆಟ್ಟತನ ನಿಮಗೆ ಶಿಕ್ಷೆಯಾಗುವಂತೆ ಮಾತ್ರ ಮಾಡುತ್ತದೆ. ನಿಮಗೆ ವಿಪತ್ತು ಬರುತ್ತದೆ. ಆ ವಿಪತ್ತು ನಿಮಗೊಂದು ಪಾಠವನ್ನು ಕಲಿಸುತ್ತದೆ. ಅದರ ಬಗ್ಗೆ ಯೋಚಿಸಿರಿ. ಆಗ ನಿಮ್ಮ ದೇವರಿಗೆ ವಿಮುಖರಾಗುವುದು ಎಷ್ಟು ಕೆಟ್ಟದ್ದೆಂದು ನಿಮಗೆ ಗೊತ್ತಾಗುತ್ತದೆ. ನನಗೆ ಭಯಭಕ್ತಿ ತೋರದೆ ಇರುವದು ತಪ್ಪು’’ ಈ ಸಂದೇಶವು ನನ್ನ ಒಡೆಯನೂ ಸರ್ವಶಕ್ತನೂ ಆಗಿರುವ ಯೆಹೋವನಿಂದ ಬಂದಿತು.

20 ‘‘ಯೆಹೂದವೇ, ಬಹಳ ದಿನಗಳ ಹಿಂದೆಯೇ ನೀನು ನಿನ್ನ ನೊಗವನ್ನು ಕಳಚಿ ಎಸೆದುಬಿಟ್ಟೆ, ನನ್ನೊಂದಿಗೆ ಬಂಧಿಸಿದ ಕಣ್ಣಿಗಳನ್ನು ಹರಿದುಬಿಟ್ಟೆ. ‘ನಾನು ನಿನ್ನನ್ನು ಸೇವಿಸುವದಿಲ್ಲ’ವೆಂದು ನನಗೆ ಹೇಳಿಬಿಟ್ಟೆ, ನಿಜವಾಗಿ ನೋಡಿದರೆ ಎತ್ತರವಾದ ಎಲ್ಲಾ ಪರ್ವತಗಳ ಮೇಲೂ ಮತ್ತು ಸೊಂಪಾಗಿ ಬೆಳೆದ ಎಲ್ಲಾ ಮರಗಳ ಕೆಳಗೂ ನೀನು ಮಲಗಿಕೊಂಡು ವೇಶ್ಯೆಯರಂತೆ ವರ್ತಿಸಿದೆ.*

---

**ಮೆಂಫೀಸ್ ಮತ್ತು ತಪನೇಸ್** ಇವು ಈಜಿಪ್ಟಿನ ಎರಡು ಪಟ್ಟಣಗಳು.

**ನೈಲ್ … ಹೋಗುವುದೇಕೆ?** ಅಥವಾ ಈಜಿಪ್ಟ್ ಮತ್ತು ಅಸ್ಸೀರಿಯಾಗಳಿಂದ ನೀನು ಸಹಾಯ ಬೇಡುವುದೇಕೆ?

**ಎತ್ತರ … ವರ್ತಿಸಿದೆ** ಈ ಸ್ಥಳಗಳಲ್ಲಿ ಜನರು ತಮ್ಮ ಸುಳ್ಳು ದೇವರುಗಳನ್ನು ಪೂಜಿಸಿದರು ಎಂದರ್ಥ.

21 ಯೆಹೂದವೇ, ನಾನು ನಿನ್ನನ್ನು ಅತ್ಯುತ್ತಮ ದ್ರಾಕ್ಷಾ
ಲತೆಯಂತೆ ನೆಟ್ಟೆ, ನೀವೆಲ್ಲರೂ ಒಳ್ಳೆಯ ಬೀಜ
ಗಳಂತಿದ್ದೀರಿ. ನೀವು ಕೆಟ್ಟ ಫಲಗಳನ್ನು ಫಲಿಸುವ
ಬೇರೆ ದ್ರಾಕ್ಷಿಯ ಬಳ್ಳಿಯಾದದ್ದು ಹೇಗೆ?
22 ನೀನು ಚೌಳನ್ನು ಹಾಕಿ ತೊಳೆದುಕೊಂಡರೂ
ಬಹಳ ಕೊಬ್ಬನ್ನು ಉಪಯೋಗಿಸಿದರೂ ನಾನು
ನಿನ್ನ ದೋಷವನ್ನು ಕಂಡುಹಿಡಿಯಬಲ್ಲೆ'' ಅನ್ನು
ತ್ತಾನೆ ಯೆಹೋವನು.
23 ''ಯೆಹೂದವೇ, 'ನಾನು ತಪ್ಪಿತಸ್ಥನಲ್ಲವೆಂದೂ
ನಾನು ಬಾಳನ ವಿಗ್ರಹಗಳನ್ನು ಪೂಜಿಸಲಿಲ್ಲ
ವೆಂದೂ' ನೀನು ನನಗೆ ಹೇಗೆ ಹೇಳುವೆ? ನೀನು
ಕಣಿವೆಯಲ್ಲಿ ಮಾಡಿದ ಕಾರ್ಯಗಳ ಬಗ್ಗೆ
ಯೋಚಿಸು. ನೀನು ಮಾಡಿದ ಕೆಲಸಗಳ ಬಗ್ಗೆ
ಯೋಚಿಸು. ನೀನು ಒಂದು ಸ್ಥಳದಿಂದ
ಮತ್ತೊಂದು ಸ್ಥಳಕ್ಕೆ ಓಡಿಹೋಗುವ ತೀವ್ರಗತಿಯ
ಹೆಣ್ಣು ಒಂಟೆಯಂತೆ ಇರುವೆ.
24 ನೀನು ಮರುಭೂಮಿಯಲ್ಲಿ ವಾಸಿಸುವ ಕಾಡುಕತ್ತೆ
ಯಂತೆ ಇರುವೆ. ಅದು ಬೆದೆಯ ಕಾಲದಲ್ಲಿ ಗಾಳಿ
ಯನ್ನು ಮೂಸಿನೋಡುತ್ತದೆ. ಅದಕ್ಕೆ ಬೆದೆ ಏರಿ
ದಾಗ ಯಾರೂ ಅದನ್ನು ಹಿಡಿಯಲು ಸಾಧ್ಯವಿಲ್ಲ.
ಅದು ಬೆದೆಗೆ ಬಂದಾಗ ಅದನ್ನು ಇಷ್ಟಪಡುವ ಪ್ರತಿ
ಯೊಂದು ಗಂಡು ಕತ್ತೆಗೆ ಅದು ಲಭಿಸುವುದು. ಆಗ
ಅದನ್ನು ಪಡೆಯುವುದು ಬಹಳ ಸುಲಭ.
25 ಯೆಹೂದವೇ ವಿಗ್ರಹಗಳ ಬೆನ್ನು ಹತ್ತಿಹೋಗುವ
ದನ್ನು ನಿಲ್ಲಿಸು! ಆ ಅನ್ಯದೇವತೆಗಳ ಬಗ್ಗೆ ನಿನ್ನಲ್ಲಿದ್ದ
ದಾಹವನ್ನು ನಿಲ್ಲಿಸು. ಆದರೆ ನೀನು 'ಅದ
ರಿಂದೇನು ಪ್ರಯೋಜನ. ನಾನು ಅವುಗಳನ್ನು ಬಿಡ
ಲಾರೆ. ನಾನು ಆ ಅನ್ಯದೇವರುಗಳನ್ನು ಪ್ರೀತಿಸು
ತ್ತೇನೆ. ನಾನು ಅವುಗಳನ್ನು ಪೂಜಿಸಬಯಸುತ್ತೇನೆ'
ಎಂದು ನೀನು ಹೇಳುವೆ.
26 ''ಜನರ ಕೈಗೆ ಸಿಕ್ಕಿಬಿದ್ದಾಗ ಕಳ್ಳನಿಗೆ ನಾಚಿಕೆಯಾಗು
ತ್ತದೆ. ಅದೇರೀತಿಯಲ್ಲಿ ಇಸ್ರೇಲ್ ವಂಶವು ನಾಚಿಕೆ
ಪಡುತ್ತದೆ. ರಾಜರು ಮತ್ತು ನಾಯಕರು ನಾಚಿಕೆ
ಪಡುವರು. ಯಾಜಕರು ಮತ್ತು ಪ್ರವಾದಿಗಳು
ನಾಚಿಕೆಪಡುವರು.
27 ಅವರು ಮರದ ತುಂಡುಗಳೊಡನೆ ಮಾತನಾಡಿ,
'ನೀನು ನಮ್ಮ ತಂದೆ' ಎಂದು ಹೇಳುವರು. ಆ
ಜನರು ಕಲ್ಲು ಬಂಡೆಯೊಂದಿಗೆ ಮಾತನಾಡಿ,
'ನೀನು ನಮಗೆ ಜನ್ಮಕೊಟ್ಟ ತಾಯಿ' ಎಂದು
ಹೇಳುವರು. ಆ ಜನರೆಲ್ಲರು ನಾಚಿಕೆಪಡುವರು.
ಅವರು ನನ್ನ ಕಡೆಗೆ ನೋಡುವದಿಲ್ಲ. ಅವರು ನನಗೆ
ವಿಮುಖರಾಗಿದ್ದಾರೆ. ಆದರೆ ಯೆಹೂದದ ಜನರು
ಕಷ್ಟದಲ್ಲಿ ಸಿಕ್ಕಿಹಾಕಿಕೊಂಡಾಗ, 'ಬಾ ನಮ್ಮನ್ನು
ರಕ್ಷಿಸು' ಎಂದು ನನ್ನನ್ನು ಕೇಳುತ್ತಾರೆ.
28 ಆ ವಿಗ್ರಹಗಳು ಬಂದು ನಿಮ್ಮನ್ನು ರಕ್ಷಿಸಲಿ, ನೀವು
ಮಾಡಿದ ವಿಗ್ರಹಗಳು ಎಲ್ಲಿವೆ? ನೀವು ಕಷ್ಟದಲ್ಲಿ
ದ್ದಾಗ ಆ ವಿಗ್ರಹಗಳು ಬಂದು ನಿಮ್ಮನ್ನು ರಕ್ಷಿಸು
ವವೇ ಎಂಬುದನ್ನು ನೋಡೋಣ, ಯೆಹೂದದ
ನಿವಾಸಿಗಳೇ, ನಿಮ್ಮಲ್ಲಿ ಎಷ್ಟು ಪಟ್ಟಣಗಳಿವೆಯೋ
ಅಷ್ಟು ವಿಗ್ರಹಗಳಿವೆ.
29 ''ನೀವು ನನ್ನೊಂದಿಗೆ ಏಕೆ ಚರ್ಚೆಮಾಡುವಿರಿ, ನೀವೆ
ಲ್ಲರೂ ನನ್ನ ವಿರುದ್ಧ ದಂಗೆ ಎದ್ದಿದ್ದೀರಿ'' ಎನ್ನು
ತ್ತಾನೆ ಯೆಹೋವನು.
30 ''ಯೆಹೂದದ ಜನರೇ ನಾನು ನಿಮ್ಮನ್ನು ಶಿಕ್ಷಿಸಿದೆ
ಆದರೆ ಅದರಿಂದ ಪ್ರಯೋಜನವಾಗಲಿಲ್ಲ. ಶಿಕ್ಷಿಸಿ
ದರೂ ನೀವು ಹಿಂತಿರುಗಿ ಬರಲಿಲ್ಲ. ನಿಮ್ಮಲ್ಲಿಗೆ
ಬಂದ ಪ್ರವಾದಿಗಳನ್ನು ನೀವು ಕತ್ತಿಯಿಂದ
ಕೊಂದು ಹಾಕಿದಿರಿ. ನೀವು ಅಪಾಯಕಾರಿಯಾದ
ಸಿಂಹದಂತಿದ್ದ ಪ್ರವಾದಿಗಳನ್ನು ಕೊಂದು
ಹಾಕಿದಿರಿ.''
31 ಈ ಪೀಳಿಗೆಯ ಜನರೇ, ಯೆಹೋವನ ಸಂದೇಶದ
ಕಡೆಗೆ ಗಮನ ಕೊಡಿ, ''ಇಸ್ರೇಲಿನ ಜನರಿಗೆ ನಾನು
ಮರಳುಗಾಡಿನಂತೆ ಇರುವೆನೇ? ನಾನು
ಗಾಡಾಂಧಕಾರಮಯವಾದ ಮತ್ತು ಅಪಾಯ
ಕಾರಿಯಾದ ಭೂಮಿಯಂತೆ ಇರುವೆನೆ? ನನ್ನ
ಜನರು, 'ನಮಗೆ ಇಷ್ಟವಾದ ಮಾರ್ಗವನ್ನು ಅನುಸ
ರಿಸಲು ನಾವು ಸ್ವತಂತ್ರರಾಗಿದ್ದೇವೆ. ಯೆಹೋ
ವನೇ, ನಾವು ಪುನಃ ನಿನ್ನಲ್ಲಿಗೆ ಬರುವದಿಲ್ಲ' ಎಂದು
ಹೇಳುತ್ತಾರೆ. ಅವರು ಹಾಗೆ ಏಕೆ ಹೇಳುತ್ತಾರೆ?
32 ಯುವತಿಯು ತನ್ನ ಆಭರಣಗಳನ್ನು ಮರೆಯು
ವಳೆ? ಇಲ್ಲ. ವಧುವು ತನ್ನ ಒಡ್ಯಾಣವನ್ನು ಮರೆ
ಯುವಳೆ? ಇಲ್ಲ. ಆದರೆ ನನ್ನ ಜನರು ನನ್ನನ್ನು
ಅಸಂಖ್ಯಾತ ದಿನಗಳವರೆಗೆ ಮರೆತು ಬಿಟ್ಟಿದ್ದಾರೆ.
33 ''ಯೆಹೂದವೇ, ಪ್ರಿಯತಮನ (ಸುಳ್ಳುದೇವತೆ
ಗಳು) ಬೆನ್ನು ಹತ್ತಿ ಹೋಗುವದು. ನಿನಗೆ ಗೊತ್ತು.
ದುರಾಭ್ಯಾಸವನ್ನು ನೀನು ಕಲಿತುಕೊಂಡಿರುವೆ.
34 ನಿನ್ನ ಕೈಗಳ ಮೇಲೆ ರಕ್ತದ ಕಲೆ ಇದೆ. ಅದು
ನಿರ್ದೋಷಿಗಳಾದ ಬಡವರ ರಕ್ತ. ಅವರು ನಿನ್ನ
ಕೈಗೆ ಸಿಕ್ಕಿ ಹಾಕಿಕೊಂಡ ಕಳ್ಳರಾಗಿರಲಿಲ್ಲ. ಆದರೂ
ನೀನು ಅವರನ್ನು ಕೊಲೆ ಮಾಡಿರುವೆ. ನೀನು
ಅಂಥ ಕೆಟ್ಟ ಕೆಲಸವನ್ನು ಮಾಡಿರುವೆ.
35 ಆದರೆ ನೀನು, 'ನಾನು ತಪ್ಪು ಮಾಡಿಲ್ಲ. ದೇವರು
ನನ್ನ ಮೇಲೆ ಕೋಪಗೊಂಡಿಲ್ಲ' ಎಂದು ಹೇಳುತ್ತಿ
ರುವೆ. ಆದುದರಿಂದ ನೀನು ಸುಳ್ಳು ಹೇಳಿದ

ಅಪರಾಧಿಯೆಂದು ನಾನು ನಿನಗೆ ತೀರ್ಪು ನೀಡು
ತ್ತೇನೆ. ಏಕೆಂದರೆ ‘ನಾನು ಯಾವ ತಪ್ಪೂ ಮಾಡಿಲ್ಲ’
ಎಂದು ನೀನು ಹೇಳಿಕೊಳ್ಳುತ್ತಿರುವೆ.
36 ನಿನ್ನ ವಿಚಾರಗಳನ್ನು ಬದಲಾಯಿಸುವದು ನಿನಗೆ
ಸುಲಭ. ಅಸ್ಸೀರಿಯಾ ನಿನ್ನನ್ನು ನಿರಾಶೆಗೊಳಿಸಿತು.
ಆಗ ನೀನು ಅಸ್ಸೀರಿಯರನ್ನು ಬಿಟ್ಟು ಈಜಿಪ್ಟಿನ
ಸಹಾಯವನ್ನು ಕೇಳಿದೆ, ಈಜಿಪ್ಟ್ ನಿನ್ನನ್ನು
ನಿರಾಶೆಗೊಳಿಸುತ್ತದೆ.
37 ಕೊನೆಗೆ ನೀನು ಈಜಿಪ್ಟನ್ನು ಬಿಡುವೆ, ನಾಚಿಕೆ
ಯಿಂದ ತಲೆಯ ಮೇಲೆ ಕೈಯಿಟ್ಟುಕೊಂಡು
ಹೊರಡುವೆ. ನೀನು ಆ ದೇಶಗಳನ್ನು ನಂಬಿರುವೆ,
ಆದರೆ ಆ ದೇಶಗಳಿಂದ ನಿನಗೆ ಯಾವ ಅನು
ಕೂಲವೂ ಆಗದು. ಯೆಹೋವನು ಆ ದೇಶ
ಗಳನ್ನು ನಿರಾಕರಿಸಿದ್ದಾನೆ.

3 ‘‘ಯೆಹೋವನು ಹೀಗೆ ನುಡಿದನು: ಒಬ್ಬ
ಮನುಷ್ಯನು ತನ್ನ ಹೆಂಡತಿಯೊಂದಿಗೆ ವಿವಾಹ
ವಿಚ್ಛೇದನ ಮಾಡಿಕೊಂಡ ಮೇಲೆ ಅವಳು
ಮತ್ತೊಬ್ಬನನ್ನು ಮದುವೆಯಾದರೆ ಆ ಮುಂಚಿನ
ಗಂಡನು ಪುನಃ ಅವಳಲ್ಲಿಗೆ ಬರಲು ಸಾಧ್ಯವೇ?
ಇಲ್ಲ. ಆ ಮನುಷ್ಯನು ಪುನಃ ಆ ಸ್ತ್ರೀಯಲ್ಲಿಗೆ
ಹೋದರೆ ಆ ದೇಶವು ಪರಿಪೂರ್ಣವಾಗಿ ‘ಅಪ
ವಿತ್ರವಾಗುತ್ತದೆ.’ ಯೆಹೂದವೇ ನೀನು ಬಹುಜನ
ರೊಂದಿಗೆ (ಸುಳ್ಳುದೇವತೆ) ಕಾಮಕೇಳಿಯಾಡಿದ
ವೇಶ್ಯಾಸ್ತ್ರೀಯಂತೆ ವರ್ತಿಸಿದೆ. ಈಗ ನೀನು ಪುನಃ
ನನ್ನಲ್ಲಿಗೆ ಬರಲು ಇಚ್ಛಿಸುವಿಯಾ?’’ ಇದು
ಯೆಹೋವನ ನುಡಿ.
2 ‘‘ಯೆಹೂದವೇ, ತಲೆಯೆತ್ತಿ ಬೋಳುಪರ್ವತಗಳ
ಕಡೆಗೆ ನೋಡು. ನೀನು ಕಾಮಕೇಳಿ ಆಡದ ಸ್ಥಳ
ಯಾವುದಾದರು ಇದೆಯೇ? ಅರಬೀಯನಂತೆ
ನೀನು ಮಾರ್ಗದ ಮಗ್ಗುಲಲ್ಲಿ ಪ್ರಿಯತಮೆಗಾಗಿ
ಎದುರುನೋಡುತ್ತಾ ಕುಳಿತಿರುವೆ. ನೀನು
ಭೂಮಿಯನ್ನು ‘ಅಪವಿತ್ರ’ಗೊಳಿಸಿದೆ; ಹೇಗೆಂದರೆ
ನೀನು ಅನೇಕ ಕೆಟ್ಟ ಕೆಲಸಗಳನ್ನು ಮಾಡಿದೆ. ನನಗೆ
ವಿಶ್ವಾಸದ್ರೋಹ ಮಾಡಿದೆ.
3 ನೀನು ಪಾಪ ಮಾಡಿದ್ದರಿಂದ ಮಳೆ ಬರಲಿಲ್ಲ;
ಹಿಂಗಾರು ಮಳೆಯೂ ಆಗಲಿಲ್ಲ. ನಿನ್ನ ಮುಖದ
ಮೇಲೆ ಇನ್ನೂ ವೇಶ್ಯೆಯ ಕಳೆಯೇ ಇದೆ. ನೀನು
ಮಾಡಿದ ದುಷ್ಕಾರ್ಯಗಳಿಗಾಗಿ ನಿನಗೆ ನಾಚಿ
ಕೆಯೂ ಆಗುವುದಿಲ್ಲ.
4 ಆದರೆ ಈಗ ನೀನು ‘ನನ್ನ ತಂದೆಯೇ, ನಾನು ಚಿಕ್ಕ
ಮಗು ಆದಾಗಿನಿಂದ ನನ್ನ ಪ್ರೀತಿಯ ಸ್ನೇಹಿತ
ನಾಗಿದ್ದೆ’ ಎಂದು ಕೂಗುತ್ತಲಿರುವೆ.
5 ಇದಲ್ಲದೆ, ಯೆಹೂದವೇ, ‘ದೇವರು ಯಾವಾ
ಗಲೂ ನನ್ನ ಮೇಲೆ ಕೋಪಿಷ್ಟನಾಗಿರುವುದಿಲ್ಲ.
ದೇವರ ಕೋಪವು ಶಾಶ್ವತವಾಗಿರುವುದಿಲ್ಲ’
ಎಂದು ನೀನು ಹೇಳಿದೆಯಲ್ಲಾ ‘‘ಆದರೆ ನಿನ್ನಿಂದ
ಸಾಧ್ಯವಾದಷ್ಟು ಕೆಡುಕನ್ನು ಮಾಡುವೆ.’’

## ಇಬ್ಬರು ಕೆಟ್ಟ ಸಹೋದರಿಯರು:
## ಇಸ್ರೇಲ್ ಮತ್ತು ಯೆಹೂದ

6ಯೆಹೂದ ಪ್ರದೇಶವನ್ನು ಯೋಷೀಯನು ಆಳುತ್ತಿ
ದ್ದಾಗ ಯೆಹೋವನು ನನ್ನೊಂದಿಗೆ ಮಾತನಾಡಿ, ‘‘ಯೆರೆ
ಮೀಯನೇ, ಇಸ್ರೇಲ್* ಎಂಬಾಕೆಯು ಮಾಡಿದ ದುಷ್ಕೃ
ತ್ಯಗಳನ್ನು ನೀನು ನೋಡಿದಿಯಾ? ಅವಳು ನನಗೆ ಹೇಗೆ
ವಂಚಿಸಿದಳು ನೋಡಿದಿಯಾ? ಅವಳು ಪ್ರತಿಯೊಂದು
ಬೆಟ್ಟದ ಮೇಲೆಯೂ ಸೊಂಪಾಗಿ ಬೆಳೆದ ಪ್ರತಿಯೊಂದು
ಮರದ ಕೆಳಗೂ ವಿಗ್ರಹಗಳ ಜೊತೆ ಜಾರತನ ಮಾಡಿದಳು.
7‘ಈ ದುಷ್ಕೃತ್ಯಗಳನ್ನೆಲ್ಲಾ ಮಾಡಿ ಮುಗಿಸಿದ ಮೇಲೆಯೂ
ಇಸ್ರೇಲ್ ನನ್ನಲ್ಲಿಗೆ ಬರಬಹುದು’ ಎಂದು ನಾನು
ಭಾವಿಸಿದ್ದೆ. ಆದರೆ ಅವಳು ನನ್ನಲ್ಲಿಗೆ ಬರಲಿಲ್ಲ. ಇಸ್ರೇಲಿನ
ವಂಚಕಿ ಸಹೋದರಿಯಾದ ಯೆಹೂದ ಎಂಬಾಕೆಯು
ಮಾಡಿದ್ದನ್ನು ನೋಡಿದಳು. 8ಇಸ್ರೇಲ್ ಎಂಬಾಕೆಯು
ನನಗೆ ವಿಶ್ವಾಸದ್ರೋಹ ಮಾಡಿದ್ದಳು. ನಾನು ಏಕೆ ಹೊರಗೆ
ಹಾಕಿದೆ ಎಂಬುದು ಅವಳಿಗೆ ಗೊತ್ತಿತ್ತು. ಅವಳ ಜಾರತನ
ಎಂಬ ಪಾಪದ ಬಗ್ಗೆ ನನಗೆ ತಿಳಿದಿದೆ ಎಂದು ಇಸ್ರೇಲಳಿಗೆ
ಗೊತ್ತಾಗಿತ್ತು. ಆದರೆ ಅದರಿಂದ ಅವಳ ವಂಚಕಳಾದ
ಸೋದರಿಗೆ ಭಯವಾಗಲಿಲ್ಲ. ಯೆಹೂದ ಭಯಪಡ
ಲಿಲ್ಲ. ಆಕೆಯು ಸಹ ವೇಶ್ಯೆಯರಂತೆ ವರ್ತಿಸಿದಳು. 9ತನ್ನ
ನಡತೆಯ ಬಗ್ಗೆ ಆಕೆ ಯೋಚಿಸಲಿಲ್ಲ. ಅವಳು ತನ್ನ
ದೇಶವನ್ನು ‘ಅಶುದ್ಧ’ಗೊಳಿಸಿದಳು. ಕಲ್ಲಿನ ಮತ್ತು ಮರದ
ವಿಗ್ರಹಗಳನ್ನು ಪೂಜಿಸಿ ಜಾರತನ ಎಂಬ ಪಾಪವನ್ನು
ಮಾಡಿದಳು.

10‘‘ಇಸ್ರೇಲಿನ ವಂಚಕಿ ಸೋದರಿಯಾದ ಯೆಹೂದ
ತುಂಬು ಹೃದಯದಿಂದ ನನ್ನಲ್ಲಿಗೆ ಬರಲಿಲ್ಲ. ಅವಳು
ನನ್ನಲ್ಲಿಗೆ ತಿರುಗಿ ಬರುವ ನಟನೆಯನ್ನು ಮಾತ್ರ
ಮಾಡಿದಳು. ಇದು ಯೆಹೋವನಾದ ನನ್ನ ನುಡಿ’’ ಎಂದು
ಹೇಳಿದನು.

11ಯೆಹೋವನು ನನಗೆ, ‘‘ಇಸ್ರೇಲ್ ಎಂಬಾಕೆಯು
ನನಗೆ ನಂಬಿಗಸ್ತಳಾಗಿ ನಡೆದುಕೊಳ್ಳಲಿಲ್ಲ. ಆದರೆ ಅವಳು
ಯೆಹೂದ ಎಂಬಾಕೆಗಿಂತ ಒಳ್ಳೆಯವಳಾಗಿ ಕಂಡು
ಬಂದಳು. 12ಯೆರೆಮೀಯನೇ, ಹೋಗು. ಈ

**ಇಸ್ರೇಲ್** ಇಲ್ಲಿ ಇಸ್ರೇಲ್ ಅಂದರೆ ಇಸ್ರೇಲಿನ ಉತ್ತರ ರಾಜ್ಯ. ಇಸ್ರೇಲ್ ಯೆರೆಮೀಯನ ಕಾಲಕ್ಕೆ 100 ವರ್ಷ ಮುಂಚೆಯೇ ಅಸ್ಸೀರಿಯ ಜನರಿಂದ ಹಾಳು ಮಾಡಲ್ಪಟ್ಟಿತ್ತು.

ಸಂದೇಶವನ್ನು ಉತ್ತರದಿಕ್ಕಿನಲ್ಲಿ ಸಾರು. ಯೆಹೋವನು ಹೀಗೆ ಹೇಳುತ್ತಾನೆ:

‘‘‘ವಿಶ್ವಾಸದ್ರೋಹಿಗಳಾದ ಇಸ್ರೇಲಿನ ಜನರೇ, ಹಿಂತಿ
ರುಗಿ ಬನ್ನಿ. ನಾನು ಹುಬ್ಬುಗಂಟಿಕ್ಕಿ ನಿಮ್ಮನ್ನು
ನೋಡುವುದನ್ನು ನಿಲ್ಲಿಸುವೆನು. ನಾನು ಕರುಣಾ
ಶಾಲಿ ನಿತ್ಯಕೋಪಿಯಲ್ಲ’ ಇದು ಯೆಹೋವನ
ನುಡಿ.
13 ನೀವು ನಿಮ್ಮ ಪಾಪವನ್ನು ಅರಿತುಕೊಂಡರೆ ಸಾಕು.
ನೀವು ನಿಮ್ಮ ದೇವರಾದ ಯೆಹೋವನಿಗೆ ವಿರುದ್ಧ
ತಿರುಗಿದಿರಿ, ಅದೇ ನಿಮ್ಮ ಪಾಪ. ನೀವು ಬೇರೆ
ರಾಷ್ಟ್ರದವರ ವಿಗ್ರಹಗಳನ್ನು ಆರಾಧಿಸಿದಿರಿ. ನೀವು
ಪ್ರತಿಯೊಂದು ಹಸಿರು ಮರದ ಕೆಳಗೆ ವಿಗ್ರಹ
ಗಳನ್ನು ಆರಾಧಿಸಿದಿರಿ. ನೀವು ನನ್ನ ಆಜ್ಞೆಯನ್ನು
ಪರಿಪಾಲಿಸಲಿಲ್ಲ’’’ ಇದು ಯೆಹೋವನ ನುಡಿ
ಯಾಗಿತ್ತು.

14‘‘ವಿಶ್ವಾಸದ್ರೋಹಿಗಳಾದ ಜನರೇ, ನನ್ನಲ್ಲಿಗೆ
ಹಿಂತಿರುಗಿ ಬನ್ನಿ’’ ಇದು ಯೆಹೋವನ ನುಡಿಯಾಗಿತ್ತು.
‘‘ನಾನೇ ನಿಮ್ಮ ಒಡೆಯನು. ನಾನು ಪ್ರತಿಯೊಂದು
ನಗರದಿಂದ ಒಬ್ಬ ವ್ಯಕ್ತಿಯನ್ನು ಮತ್ತು ಪ್ರತಿಯೊಂದು
ಕುಲದಿಂದ ಇಬ್ಬರನ್ನು ಆರಿಸಿ ಚೀಯೋನಿಗೆ* ಕರೆದು
ತರುವೆನು. 15ನಿಮಗೆ ಹೊಸ ಪಾಲಕರನ್ನು ನೇಮಿಸು
ವೆನು. ಆ ಪಾಲಕರು ನನಗೆ ನಂಬಿಗಸ್ತರಾಗಿರುತ್ತಾರೆ.
ಅವರು ಬುದ್ಧಿ ಮತ್ತು ಜ್ಞಾನಗಳಿಂದ ನಿಮಗೆ ಮಾರ್ಗ
ದರ್ಶನ ಮಾಡುತ್ತಾರೆ. 16ಆಗ ದೇಶದಲ್ಲಿ ನಿಮ್ಮ ಸಂಖ್ಯೆ
ಬೆಳೆಯುವದು’’ ಇದು ಯೆಹೋವನ ನುಡಿ.
‘‘ಆ ಕಾಲದಲ್ಲಿ ಜನರು, ‘ನಮ್ಮಲ್ಲಿ ಯೆಹೋವನ
ಒಡಂಬಡಿಕೆಯ ಪೆಟ್ಟಿಗೆ* ಇದ್ದ ದಿನಗಳನ್ನು ಜ್ಞಾಪಿಸಿ
ಕೊಳ್ಳುವ’ ಎಂದು ಹೇಳುವದಿಲ್ಲ. ಅವರು, ‘ಪವಿತ್ರ
ಪೆಟ್ಟಿಗೆ’ಯ ಬಗ್ಗೆ ಯೋಚನೆ ಸಹ ಮಾಡುವದಿಲ್ಲ. ಅವರು
ಅದನ್ನು ಜ್ಞಾಪಿಸುವದೂ ಇಲ್ಲ. ಅದರ ಅಭಾವವನ್ನು
ಮನಸ್ಸಿಗೆ ತಂದುಕೊಳ್ಳುವದೂ ಇಲ್ಲ. ಅವರು ಇನ್ನೊಂದು
‘ಪವಿತ್ರ ಪೆಟ್ಟಿಗೆ’ಯನ್ನು ಸಿದ್ಧಪಡಿಸುವದಿಲ್ಲ.
17ಆ ಕಾಲದಲ್ಲಿ ಜೆರುಸಲೇಮ್ ನಗರಕ್ಕೆ
‘ಯೆಹೋವನ ಸಿಂಹಾಸನ’ ಎಂದು ಕರೆಯುವರು.
ಯೆಹೋವನ ಹೆಸರಿಗೆ ಗೌರವ ಸೂಚಿಸಲು ಎಲ್ಲಾ
ಜನಾಂಗದವರು ಜೆರುಸಲೇಮಿನಲ್ಲಿ ಬಂದು ಸೇರುವರು.
ಅವರು ತಮ್ಮ ದುಷ್ಟ ಮತ್ತು ಹಟಮಾರಿ ಹೃದಯಗಳನ್ನು
ಅನುಸರಿಸುವುದಿಲ್ಲ. 18ಆ ಕಾಲದಲ್ಲಿ ಯೆಹೂದದ
ಜನರು ಇಸ್ರೇಲ್ ಜನರನ್ನು ಕೂಡಿಕೊಳ್ಳುವರು.
ಅವೆರಡೂ ಕೂಡಿ ಉತ್ತರ ದಿಕ್ಕಿನ ಪ್ರದೇಶದಿಂದ ಬರು
ವವು. ನಾನು ಅವರ ಪೂರ್ವಿಕರಿಗೆ ಕೊಟ್ಟ ಪ್ರದೇಶಕ್ಕೆ
ಅವರು ಬರುವರು.

19 ‘‘ಯೆಹೋವನಾದ ನಾನು ಹೀಗೆಂದುಕೊಂಡೆ:
‘ನಾನು ಸಂತೋಷದಿಂದ ನಿಮ್ಮನ್ನು ಮಕ್ಕಳಂತೆ
ನೋಡಿಕೊಳ್ಳುವೆನು. ಬೇರೆ ಎಲ್ಲಾ ಜನಾಂಗಗಳ
ಪ್ರದೇಶಕ್ಕಿಂತ ಅತಿ ಸುಂದರವಾದ ಪ್ರದೇಶವನ್ನು
ನಿಮಗೆ ಕೊಡುವದಕ್ಕೆ ನಾನು ಸಂತೋಷ ಪಡು
ವೆನು.’ ನೀವು ನನ್ನನ್ನು ‘ತಂದೆ’ ಎಂದು ಕರೆಯುವಿ
ರೆಂದು ನಾನು ಭಾವಿಸಿದ್ದೆ. ನೀವು ಯಾವಾಗಲೂ
ನನ್ನ ಹಿಂಬಾಲಕರಾಗಿರುವಿರೆಂದು ಭಾವಿಸಿದ್ದೆ.
20 ಆದರೆ ನೀವು ಗಂಡನಿಗೆ ವಂಚಿಸುವ ಜಾರಿಣಿ
ಯಂತಾದಿರಿ. ಇಸ್ರೇಲ್ ವಂಶದವರೇ, ನೀವು
ನನಗೆ ದ್ರೋಹ ಮಾಡಿದಿರಿ’’ ಎಂದು
ಯೆಹೋವನು ನುಡಿದನು.
21 ‘‘ಬೋಳು ಪರ್ವತದ ಮೇಲೆ ಅಳುವ ಧ್ವನಿಯನ್ನು
ನೀವು ಕೇಳಬಹುದು. ಇಸ್ರೇಲಿನ ಜನರು ಕಣ್ಣೀರು
ಸುರಿಸಿ ಕರುಣೆಗಾಗಿ ಪ್ರಾರ್ಥಿಸುತ್ತಿದ್ದಾರೆ. ಅವರು
ತುಂಬಾ ಕೆಟ್ಟು ಹೋಗಿ ತಮ್ಮ ದೇವರಾದ
ಯೆಹೋವನನ್ನು ಮರೆತರು.
22 ಇದಲ್ಲದೆ ಯೆಹೋವನು, ‘‘ಅಪನಂಬಿಗಸ್ತರಾದ
ಜನರೇ, ನನ್ನಲ್ಲಿಗೆ ಹಿಂತಿರುಗಿ ಬನ್ನಿ. ನನಗೆ ವಿಶ್ವಾಸ
ದ್ರೋಹ ಮಾಡಿದುದಕ್ಕೆ ನಾನು ಕ್ಷಮಿಸುವೆನು,
ಹಿಂತಿರುಗಿ ಬನ್ನಿ,’’ ಅದಕ್ಕೆ ಜನರು ‘‘ಆಗಲಿ, ನಾವು
ನಿನ್ನಲ್ಲಿಗೆ ಬರುತ್ತೇವೆ. ನೀನೇ ನಮ್ಮ ದೇವರಾದ
ಯೆಹೋವನು.
23 ಬೆಟ್ಟದ ಮೇಲೆ ವಿಗ್ರಹಗಳ ಪೂಜೆ ಮಾಡಿದ್ದು ನಮ್ಮ
ಮೂರ್ಖತನವಾಯಿತು. ಬೆಟ್ಟಗಳ ಮೇಲಿನ ಎಲ್ಲಾ
ಉತ್ಸವಗಳು ಬರೀ ಸುಳ್ಳು . ಇಸ್ರೇಲಿನ ರಕ್ಷಣೆ
ಖಚಿತವಾಗಿಯೂ ನಮ್ಮ ದೇವರಾದ ಯೆಹೋವ
ನಿಂದ ಮಾತ್ರ ಸಾಧ್ಯ.
24 ‘‘ನಮ್ಮ ಪೂರ್ವಿಕರು ಸಂಪಾದಿಸಿದ್ದೆಲ್ಲವನ್ನು
ನೈವೇದ್ಯದಲ್ಲಿ ಸುಳ್ಳುದೇವರಾದ ಬಾಳನು ತಿಂದು
ಬಿಟ್ಟನು. ನಮ್ಮ ಬಾಲ್ಯದಿಂದಲೂ ಹೀಗಾಗುತ್ತ
ಬಂದಿದೆ. ನಾಚಿಕೆಗೇಡಿಯಾದದ್ದು ನಮ್ಮ ಪೂರ್ವಿ
ಕರ ಕುರಿ ಮತ್ತು ದನಗಳನ್ನೂ ಅವರ ಗಂಡು ಮತ್ತು

---

**ಚೀಯೋನ್** ಜೆರುಸಲೇಮ್ ಕಟ್ಟಲ್ಪಟ್ಟ ಬೆಟ್ಟದ ಆಗ್ನೇಯ ಭಾಗ. ಕೆಲವು ಸಲ ಜೆರುಸಲೇಮಿನಲ್ಲಿ ವಾಸಮಾಡುವ ದೇವ ಭಕ್ತರು ಎಂದು ಅರ್ಥ ಬರುತ್ತದೆ.

**ಒಡಂಬಡಿಕೆಯ ಪೆಟ್ಟಿಗೆ** ದೇವರು ತಮ್ಮೊಡನೆ ಇದ್ದಾನೆಂದು ಹೇಳಲು ಇಸ್ರೇಲರಿಗೆ ಸಾಕ್ಷಿಯಾಗಿರುವ ಒಂದು ಪೆಟ್ಟಿಗೆ, ಅದರಲ್ಲಿ ಹತ್ತು ದೈವಾಜ್ಞೆಗಳನ್ನು ಬರೆಯಲ್ಪಟ್ಟ ಶಿಲಾಫಲಕಗಳು ಮತ್ತು ಉಳಿದ ವಸ್ತುಗಳು ಇದ್ದವು.

ಹೆಣ್ಣುಮಕ್ಕಳನ್ನೂ ಬಲಿ ತೆಗೆದುಕೊಳ್ಳುತ್ತಾ
ಬಂದಿದೆ.
25 ನಾವು ತಂದುಕೊಂಡ ಅವಮಾನದಲ್ಲಿ ಬಿದ್ದಿ
ರೋಣ. ನಮ್ಮ ನಾಚಿಕೆಯು ಕಂಬಳಿಯು
ಹೊದಿಸಿದಂತೆ ನಮ್ಮನ್ನು ಮುಚ್ಚಿಬಿಡಲಿ. ನಾವು
ನಮ್ಮ ದೇವರಾದ ಯೆಹೋವನ ವಿಷಯದಲ್ಲಿ
ಪಾಪ ಮಾಡಿದ್ದೇವೆ. ನಾವು ಮತ್ತು ನಮ್ಮ ಪೂರ್ವಿ
ಕರು ಪಾಪ ಮಾಡಿದ್ದೇವೆ. ನಮ್ಮ ಬಾಲ್ಯದಿಂದ
ಇಂದಿನವರೆಗೆ ನಾವು ನಮ್ಮ ದೇವರಾದ
ಯೆಹೋವನ ಆಜ್ಞೆಯನ್ನು ಪಾಲಿಸಲಿಲ್ಲ.''

4 ಇದು ಯೆಹೋವನ ಸಂದೇಶ ''ಇಸ್ರೇಲೇ, ನೀನು
ಹಿಂತಿರುಗಿ ಬರಲು ಇಚ್ಛಿಸಿದರೆ ನನ್ನಲ್ಲಿಗೆ ಹಿಂತಿ
ರುಗಿ ಬಾ. ನಿನ್ನ ವಿಗ್ರಹಗಳನ್ನು ಎಸೆದುಬಿಡು.
ನನ್ನಿಂದ ದೂರಸರಿದು ಅಲೆದಾಡಬೇಡ.
2 ನೀನು ಹೀಗೆ ಮಾಡಿದರೆ ನನ್ನ ಹೆಸರಿನ ಮೇಲೆ
ಪ್ರಮಾಣ ಮಾಡಲು ಶಕ್ತಳಾಗುವೆ. 'ಹೌದು,
ಯೆಹೋವನಾಣೆ' ಎಂದು ಹೇಳಶಕ್ತಳಾಗುವೆ.
ನೀನು ಆ ಪದಗಳನ್ನು ಸತ್ಯವಾಗಿಯೂ ಪ್ರಾಮಾ
ಣಿಕವಾಗಿಯೂ ಸರಿಯಾಗಿ ಉಪಯೋಗಿಸಲು
ಸಾಧ್ಯವಾಗುತ್ತದೆ. ನೀನು ಹೀಗೆ ಮಾಡಿದರೆ, ಎಲ್ಲಾ
ಜನಾಂಗಗಳು ಯೆಹೋವನ ಆಶೀರ್ವಾದವನ್ನು
ಪಡೆಯುತ್ತವೆ. ಆತನ ಕಾರ್ಯಗಳಿಗಾಗಿ ಆತನಿಗೆ
ಸ್ತೋತ್ರ ಮಾಡುತ್ತವೆ.''

3 ಯೆಹೂದ ಜನಾಂಗದ ಜನರಿಗೂ ಜೆರುಸಲೇಮ್
ನಗರದ ಜನರಿಗೂ ಯೆಹೋವನು ಹೀಗೆ ಹೇಳುತ್ತಾನೆ:

''ನಿಮ್ಮ ಹೊಲಗಳಲ್ಲಿ ನೇಗಿಲು ಹೊಡೆದಿಲ್ಲ, ಆ
ಹೊಲಗಳನ್ನು ನೇಗಿಲು ಹೊಡೆದು ಸ್ವಚ್ಛಮಾಡಿರಿ.
ಮುಳ್ಳುಗಳಲ್ಲಿ ಬೀಜಗಳನ್ನು ಬಿತ್ತಬೇಡಿರಿ.
4 ಯೆಹೋವನ ಮನುಷ್ಯರಾಗಿರಿ, ನಿಮ್ಮ ಹೃದಯ
ಪರಿವರ್ತನೆ* ಮಾಡಿಕೊಳ್ಳಿರಿ. ಯೆಹೂದದ
ಜನಗಳೇ, ಜೆರುಸಲೇಮಿನ ಜನರೇ, ನೀವು
ಬದಲಾಗದಿದ್ದರೆ ನನಗೆ ವಿಪರೀತ ಕೋಪ ಬರು
ವುದು. ನನ್ನ ಕೋಪವು ಬೆಂಕಿಯ ಜ್ವಾಲೆಯಂತೆ
ಭರದಿಂದ ಹಬ್ಬುವದು. ನನ್ನ ಕೋಪವು ನಿಮ್ಮನ್ನು
ಸುಟ್ಟು ಬೂದಿ ಮಾಡುವುದು. ಯಾರಿಂದಲೂ ಆ
ಬೆಂಕಿಯನ್ನು ಆರಿಸುವುದು ಸಾಧ್ಯವಾಗುವದಿಲ್ಲ.
ಇದೆಲ್ಲಾ ಏಕೆ ನಡೆಯುವುದು? ನೀವು ಮಾಡಿದ
ದುಷ್ಕಾರ್ಯಗಳಿಂದಲೇ.''

## ಉತ್ತರ ದಿಕ್ಕಿನಿಂದ ವಿಪತ್ತು

5 ''ಈ ಸಂದೇಶವನ್ನು ಯೆಹೂದ ಜನರಲ್ಲಿ ಸಾರಿರಿ:

ಜೆರುಸಲೇಮ್ ನಗರದ ಪ್ರತಿಯೊಬ್ಬನಿಗೂ
'ದೇಶದಲ್ಲೆಲ್ಲಾ ತುತ್ತೂರಿಗಳನ್ನು ಊದಿರಿ.' ಎಂದು
ಹೇಳಿರಿ. ದೊಡ್ಡ ಧ್ವನಿಯಲ್ಲಿ 'ಒಂದು ಕಡೆ
ಸೇರೋಣ ಬನ್ನಿ, ರಕ್ಷಣೆಗಾಗಿ ಭದ್ರವಾದ
ನಗರಗಳಿಗೆ ಓಡಿಹೋಗೋಣ ಬನ್ನಿ' ಎಂದು
ಕೂಗಿಹೇಳಿರಿ.
6 ಚೀಯೋನಿನ ಕಡೆಗೆ ಧ್ವಜವನ್ನು ಎತ್ತಿ ಸಂಕೇತ
ಕೊಡಿ. ನಿಲ್ಲಬೇಡಿ, ನಿಮ್ಮ ಜೀವ ರಕ್ಷಣೆಗಾಗಿ
ಓಡಿರಿ. ನಾನು ಉತ್ತರದಿಂದ ವಿಪತ್ತನ್ನು ತರುತ್ತಿರು
ವುದರಿಂದ ನೀವು ಹೀಗೆ ಮಾಡಬೇಕು.
ನಾನು ಬಯಂಕರವಾದ ವಿನಾಶವನ್ನುಂಟು
ಮಾಡಲಿದ್ದೇನೆ.''
7 ತನ್ನ ಗುಹೆಯಿಂದ ಒಂದು ''ಸಿಂಹವು'' ಹೊರ
ಬಂದಿದೆ. ಜನಾಂಗಗಳ ವಿನಾಶಕನು ಹೆಜ್ಜೆ ಹಾಕು
ತ್ತಿದ್ದಾನೆ. ಅವನು ನಿಮ್ಮ ಪ್ರದೇಶವನ್ನು ನಾಶ
ಮಾಡಲು ತನ್ನ ಮನೆಯನ್ನು ಬಿಟ್ಟು ಹೊರಟಿ
ದ್ದಾನೆ. ನಿಮ್ಮ ಪಟ್ಟಣಗಳೆಲ್ಲ ನಾಶ ಹೊಂದುವವು.
ಅಲ್ಲಿ ವಾಸಿಸಲು ಜನರೇ ಇಲ್ಲದಂತಾಗುವುದು.
8 ಆದುದರಿಂದ ಗೋಣಿತಟ್ಟನ್ನು ಸುತ್ತಿಕೊಳ್ಳಿರಿ,
ದೊಡ್ಡ ಧ್ವನಿಯಿಂದ ಗೋಳಾಡಿರಿ. ಏಕೆಂದರೆ
ಯೆಹೋವನು ನಮ್ಮ ಮೇಲೆ ತುಂಬ ಕೋಪ
ಗೊಂಡಿದ್ದಾನೆ.''
9 ಯೆಹೋವನು ಹೇಳುವುದೇನೆಂದರೆ, ''ಆ
ಸಮಯದಲ್ಲಿ ರಾಜನು ಮತ್ತು ನಾಯಕರು ತಮ್ಮ
ಧೈರ್ಯವನ್ನು ಕಳೆದುಕೊಳ್ಳುವರು. ಯಾಜಕರು
ಭಯಪಡುವರು; ಪ್ರವಾದಿಗಳು ಬೆರ
ಗಾಗುವರು.''

10 ಆಗ ಯೆರೆಮೀಯನೆಂಬ ನಾನು, ''ನನ್ನ ಒಡೆಯ
ನಾದ ಯೆಹೋವನೇ, ನೀನು ಯೆಹೂದ ಮತ್ತು ಜೆರುಸ
ಲೇಮಿನ ಜನರಿಗೆ ಮೋಸ ಮಾಡಿದೆ, 'ನೀವು ಶಾಂತಿ
ಯಿಂದ ಇರುವಿರಿ ' ಎಂದು ನೀನು ಅವರಿಗೆ ಹೇಳಿದೆ.
ಆದರೆ ಈಗ ಅವರ ಕತ್ತಿನ ಮೇಲೆ ಖಡ್ಗ ಇದೆ '' ಎಂದೆನು.

11 ಆ ಸಮಯದಲ್ಲಿ ಯೆಹೂದ ಮತ್ತು ಜೆರುಸ
ಲೇಮಿನ ಜನರಿಗೆ ಒಂದು ಸಂದೇಶವನ್ನು ಕೊಡ
ಲಾಗುವುದು. ''ಬೋಳುಬೆಟ್ಟಗಳಿಂದ ಒಂದು
ಬಿಸಿಗಾಳಿಯು ಬೀಸುವುದು. ಅದು ಮರಳು ಗಾಡಿ
ನಿಂದ ಬೀಸುವುದು. ಇದು ರೈತನು ತೂರಿ

---

**ಹೃದಯ ಪರಿವರ್ತನೆ** ಅಕ್ಷರಶಃ, ನಿಮ್ಮ ಹೃದಯದ ಮುಂದೊಗಲನ್ನು ಕತ್ತರಿಸಿ ಹಾಕಿರಿ.

ಹೊಟ್ಟನಿಂದ ಕಾಳನ್ನು ಬೇರ್ಪಡಿಸಲು ಬೇಕಾ
ಗುವ ಸೌಮ್ಯವಾದ ಗಾಳಿಯಂತಲ್ಲ.
12 ಇದು ಅದಕ್ಕಿಂತಲೂ ಬಹು ಬಿರುಸಾಗಿ ಬೀಸು
ತ್ತದೆ. ಅದು ನನ್ನಿಂದ ಬರುತ್ತದೆ. ಈಗ ಯೆಹೂದದ
ಜನರಿಗೆ ನ್ಯಾಯವಾದ ದಂಡನೆಗಳನ್ನು
ವಿಧಿಸುವೆನು.''
13 ಇಗೋ, ಆ ಶತ್ರುವು ಮೇಘಮಾಲೆಯಂತೆ ಏಳು
ತ್ತಿದ್ದಾನೆ. ಅವನ ರಥಗಳು ಬಿರುಗಾಳಿಯಂತೆ
ಕಾಣುತ್ತಿವೆ. ಅವನ ಕುದುರೆಗಳು ಹದ್ದುಗಳಿಗಿಂತ
ವೇಗವಾಗಿ ಓಡುತ್ತಿವೆ. ಇದು ನಮಗೆ ತುಂಬ
ಅಪಾಯಕಾರಿಯಾಗಿದೆ; ನಾವು ಹಾಳಾಗಿ
ಹೋದೆವು.
14 ಜೆರುಸಲೇಮಿನ ಜನರೇ, ನಿಮ್ಮ ಹೃದಯದ ಕೆಟ್ಟ
ತನವನ್ನು ತೊಳೆದುಕೊಳ್ಳಿರಿ. ರಕ್ಷಣೆಹೊಂದಲು
ನಿಮ್ಮ ಹೃದಯಗಳನ್ನು ಪವಿತ್ರಗೊಳಿಸಿರಿ. ದುರಾ
ಲೋಚನೆಗಳನ್ನು ಮುಂದುವರಿಸಬೇಡಿರಿ.
15 ಕೇಳಿರಿ, ದಾನ್ ಪ್ರದೇಶದಿಂದ ದೂತನ ಸ್ವರವು
ಕೇಳಿಬರುತ್ತಿದೆ. ಎಫ್ರಾಯೀಮ್ ಬೆಟ್ಟಪ್ರದೇಶ
ದಿಂದ ಒಬ್ಬನು ಕೆಟ್ಟ ಸಮಾಚಾರವನ್ನು
ತರುತ್ತಿದ್ದಾನೆ.
16 ''ಇದನ್ನು ಈ ಜನಾಂಗಕ್ಕೆ ತಿಳಿಸಿರಿ, ಜೆರುಸಲೇಮಿನ
ಜನರಲ್ಲಿ ಈ ಸಮಾಚಾರವನ್ನು ಹರಡಿರಿ. ಬಹು
ದೂರದೇಶದಿಂದ ಶತ್ರುಗಳು ಬರುತ್ತಿದ್ದಾರೆ. ಆ
ಶತ್ರುಗಳು ಯೆಹೂದದ ನಗರಗಳ ವಿರುದ್ಧ
ಯುದ್ಧದ ಘೋಷಣೆಗಳನ್ನು ಕೂಗುತ್ತಿದ್ದಾರೆ.
17 ಹೊಲವನ್ನು ಕಾಯುವ ಜನರಂತೆ ವೈರಿಗಳು
ಜೆರುಸಲೇಮನ್ನು ಮುತ್ತಿಕೊಂಡಿದ್ದಾರೆ. ಯೆಹೂ
ದವೇ, ನೀನು ನನಗೆ ತಿರುಗಿಬಿದ್ದೆ, ಅದಕ್ಕಾಗಿ ನಿನ್ನ
ಮೇಲೆ ಶತ್ರುಗಳು ಬೀಳುತ್ತಿದ್ದಾರೆ'' ಎಂದು
ಯೆಹೋವನು ಹೇಳುವನು.

18 ''ನಿನ್ನ ನಡತೆಯೂ ನಿನ್ನ ಕೃತ್ಯಗಳೂ ನಿನಗೆ ಈ
ಕಷ್ಟವನ್ನು ತಂದವು. ನಿನ್ನ ದುಷ್ಟತನವೇ ನಿನ್ನ
ಜೀವನ ವನ್ನು ಇಷ್ಟು ಕಷ್ಟಕರವನ್ನಾಗಿ ಮಾಡಿದೆ.
ನಿನ್ನ ದುಷ್ಟ ತನವೇ ನಿನ್ನ ಮನಸ್ಸಿಗೆ ಆಳವಾದ
ನೋವನ್ನು ಉಂಟುಮಾಡಿದೆ.''

## ಯೆರೆಮೀಯನ ಗೋಳಾಟ

19 ಅಯ್ಯೋ, ನನ್ನ ದುಃಖ ಮತ್ತು ಚಿಂತೆ ನನ್ನ
ಹೊಟ್ಟೆಯಲ್ಲಿ ಸಂಕಟವನ್ನು ಉಂಟುಮಾಡುತ್ತಿವೆ.
ನೋವಿನಿಂದ ನಾನು ಬಾಗಿಹೋಗಿದ್ದೇನೆ. ನಾನು
ತುಂಬ ಹೆದರಿಕೊಂಡಿದ್ದೇನೆ. ನನ್ನ ಹೃದಯವು
ಒಳಗೆ ತಳಮಳಗೊಳ್ಳುತ್ತಿದೆ. ನಾನು ಬಾಯಿ
ಮುಚ್ಚಿಕೊಂಡಿರಲಾರೆ. ಏಕೆಂದರೆ, ನಾನು ತುತ್ತೂ
ರಿಯ ಶಬ್ದವನ್ನು ಕೇಳಿದ್ದೇನೆ. ಆ ತುತ್ತೂರಿಯು
ಸೈನ್ಯವನ್ನು ಯುದ್ಧಕ್ಕೆ ಕರೆಯುತ್ತಿದೆ.
20 ವಿನಾಶದ ಮೇಲೆ ವಿನಾಶ ಬಂದು, ಇಡೀ ದೇಶವೇ
ಹಾಳಾಗಿದೆ. ಫಕ್ಕನೆ ನನ್ನ ಗುಡಾರಗಳು ಹಾಳಾ
ದವು. ನನ್ನ ಪರದೆಗಳು ಹರಿದುಹೋದವು.
21 ಯೆಹೋವನೇ, ಎಷ್ಟು ಹೊತ್ತಿನವರೆಗೆ ನಾನು
ಯುದ್ಧ ಧ್ವಜಗಳನ್ನು ನೋಡಬೇಕು? ಎಷ್ಟು
ಹೊತ್ತಿನವರೆಗೆ ನಾನು ಯುದ್ಧದ ತುತ್ತೂರಿಗಳನ್ನು
ಕೇಳಬೇಕು?
22 ದೇವರು, ''ನನ್ನ ಜನರು ಮೂರ್ಖರಾಗಿದ್ದಾರೆ.
ಅವರು ನನ್ನನ್ನು ಅರಿಯದವರಾಗಿದ್ದಾರೆ. ಅವರು
ಮೂಢ ಮಕ್ಕಳಾಗಿದ್ದಾರೆ. ಅವರು ಅವಿವೇಕಿಗ
ಳಾಗಿದ್ದಾರೆ. ಅವರು ದುಷ್ಕಾರ್ಯದಲ್ಲಿ ನಿಪುಣ
ರಾಗಿದ್ದಾರೆ. ಅವರು ಒಳ್ಳೆಯದನ್ನು ಮಾಡಲರಿ
ಯದವರಾಗಿದ್ದಾರೆ'' ಎಂದನು.

## ವಿಪತ್ತಿನ ಆಗಮನ

23 ನಾನು ಭೂಮಿಯ ಕಡೆಗೆ ನೋಡಿದೆ,
ಭೂಮಿಯು ಬರಿದಾಗಿತ್ತು. ಭೂಮಿಯ
ಮೇಲೇನೂ ಇರಲಿಲ್ಲ. ನಾನು ಆಕಾಶದ ಕಡೆಗೆ
ನೋಡಿದೆ, ಅದರ ಬೆಳಕು ಹೋಗಿಬಿಟ್ಟಿತ್ತು.
24 ನಾನು ಪರ್ವತಗಳ ಕಡೆಗೆ ನೋಡಿದೆ, ಅವುಗಳು
ನಡುಗುತ್ತಿದ್ದವು. ಎಲ್ಲಾ ಬೆಟ್ಟಗಳು ಅದರು
ತ್ತಿದ್ದವು.
25 ನಾನು ನೋಡಿದರೂ ಅಲ್ಲಿ ಜನರಿರಲಿಲ್ಲ. ಆಕಾ
ಶದ ಎಲ್ಲಾ ಪಕ್ಷಿಗಳು ಹಾರಿಹೋಗಿದ್ದವು.
26 ನಾನು ನೋಡಿದಾಗ ಫಲವತ್ತಾದ ಭೂಮಿಯು
ಮರಳುಗಾಡಾಗಿತ್ತು. ಆ ಪ್ರದೇಶದ ಎಲ್ಲಾ ನಗರ
ಗಳು ಹಾಳಾಗಿಹೋಗಿದ್ದವು. ಯೆಹೋವನು
ಇದನ್ನು ಮಾಡಿದ್ದನು. ಯೆಹೋವನು ತನ್ನ
ಭಯಂಕರವಾದ ಕೋಪದಿಂದ ಇದನ್ನು
ಮಾಡಿದ್ದನು.
27 ಯೆಹೋವನು ಹೀಗೆ ಹೇಳುತ್ತಾನೆ: ''ಇಡೀ
ದೇಶವು ಹಾಳಾಗುವುದು. ಆದರೆ ನಾನು ಭೂಮಿ
ಯನ್ನು ಸಂಪೂರ್ಣವಾಗಿ ನಾಶಮಾಡುವದಿಲ್ಲ.
28 ಈ ಪ್ರದೇಶದ ಜನರು ಸತ್ತವರಿಗಾಗಿ ಅಳುವರು.
ಆಕಾಶವು ಕಪ್ಪಾಗುವುದು. ನಾನು ಹೇಳಿದ್ದೇನೆ
ಅದು ಬದಲಾಗುವುದಿಲ್ಲ. ನಾನು ಒಂದು
ನಿರ್ಣಯ ತೆಗೆದುಕೊಂಡಿದ್ದೇನೆ, ನಾನು ನನ್ನ
ಮನಸ್ಸನ್ನು ಬದಲಾಯಿಸುವದಿಲ್ಲ.''

29 ಯೆಹೂದದ ಜನರು ಕುದುರೆಗಳ, ಸವಾರರ, ಬಿಲ್ಲುಗಾರರ ಶಬ್ದಗಳನ್ನು ಕೇಳಿ ಓಡಿ ಹೋಗುವರು. ಕೆಲವು ಜನರು ಗುಹೆಯಲ್ಲಿ ಅಡಗಿಕೊಳ್ಳುವರು. ಕೆಲವರು ಪೊದೆಗಳಲ್ಲಿ ಅವಿತು ಕೊಳ್ಳುವರು. ಕೆಲವರು ಬೆಟ್ಟಗಳನ್ನು ಹತ್ತಿಹೋಗುವರು. ಯೆಹೂದದ ಎಲ್ಲಾ ನಗರಗಳು ಬರಿದಾಗುವವು. ಅಲ್ಲಿ ಒಬ್ಬರೂ ಇರುವದಿಲ್ಲ.

30 ಹಾಳಾಗಿಹೋದ ಯೆಹೂದವೇ, ನೀನು ಮಾಡುತ್ತಿರುವುದೇನು? ಅತ್ಯುತ್ತುಮವಾದ ಗುಲಾಬಿ ಬಣ್ಣದ ಪೋಷಾಕನ್ನು ನೀನು ಧರಿಸಿಕೊಳ್ಳುತ್ತಿರುವುದೇಕೆ? ಸುವರ್ಣಾಭರಣಗಳಿಂದ ನಿನ್ನನ್ನು ಏಕೆ ಅಲಂಕರಿಸಿಕೊಳ್ಳುತ್ತಿರುವೆ? ಕಣ್ಣಿಗೆ ಕಾಡಿಗೆಯನ್ನು ಏಕೆ ತೀಡುತ್ತಿರುವೆ? ನೀನು ಅಲಂಕಾರ ಮಾಡಿಕೊಳ್ಳುವದೆಲ್ಲ ವ್ಯರ್ಥ. ನಿನ್ನ ಪ್ರಿಯತಮರು ನಿನ್ನನ್ನು ತಿರಸ್ಕರಿಸುತ್ತಾರೆ. ಅವರು ನಿನ್ನನ್ನು ಕೊಲೆ ಮಾಡುವ ಪ್ರಯತ್ನದಲ್ಲಿದ್ದಾರೆ.

31 ಮೊದಲನೆ ಹೆರಿಗೆಯ ಸಮಯದಲ್ಲಿ ವೇದನೆ ಪಡುವ ಹೆಂಗಸಿನ ಸ್ವರದಂತಿರುವ ಒಂದು ಧ್ವನಿಯನ್ನು ನಾನು ಕೇಳಿದೆ, ಇದು ಚೀಯೋನ್ ನಗರಿಯ ಮಗಳ ಕೂಗಾಟ. ಅವಳು ತನ್ನ ಎರಡೂ ಕೈಗಳನ್ನು ಮೇಲಕ್ಕೆ ಎತ್ತಿ ಪ್ರಾರ್ಥಿಸುತ್ತಾ, ‘‘ಅಯ್ಯೋ, ನಾನು ಮೂರ್ಛೆ ಹೋಗುವದರಲ್ಲಿದ್ದೇನೆ, ನನ್ನ ಸುತ್ತಲೆಲ್ಲ ಕೊಲೆಗಡುಕರಿದ್ದಾರೆ’’ ಎಂದು ಹೇಳುತ್ತಿದ್ದಾಳೆ.

## ಯೆಹೂದಿಯರ ದುಷ್ಟತನ

5 ಯೆಹೋವನು ಇಂತೆನ್ನುತ್ತಾನೆ: ‘‘ಜೆರುಸಲೇಮಿನ ಬೀದಿಗಳಲ್ಲಿ ಅತ್ತಿತ್ತ ತಿರುಗಾಡಿ ನೋಡಿರಿ; ಈ ವಿಷಯಗಳ ಬಗ್ಗೆ ವಿಚಾರ ಮಾಡಿರಿ. ನಗರದ ಸಾರ್ವಜನಿಕ ಸ್ಥಳಗಳಲ್ಲಿ ಹುಡುಕಿನೋಡಿರಿ. ಸತ್ಯ ಶೋಧಕನೂ ಪ್ರಾಮಾಣಿಕನೂ ಒಳ್ಳೆಯವನೂ ಆಗಿರುವ ಮನುಷ್ಯನು ಎಲ್ಲಿ ಸಿಕ್ಕುವನೋ ನೋಡಿ. ಕೇವಲ ಒಬ್ಬ ಒಳ್ಳೆಯವನಿದ್ದರೂ ನಾನು ಇಡೀ ಜೆರುಸಲೇಮನ್ನು ಕ್ಷಮಿಸುತ್ತೇನೆ.
2 ಜನರು ಆಣೆ ಮಾಡುವಾಗ ‘ದೇವರಾಣೆ’ ಎಂದು ಹೇಳುವರು. ಆದರೆ ಅದು ಕೇವಲ ಬಾಯಿ ಮಾತಷ್ಟೇ ಹೊರತು ಯಥಾರ್ಥವಾದದ್ದಲ್ಲ.’’

3 ಯೆಹೋವನೇ, ನೀನು ನಂಬಿಗಸ್ತರಾದ ಜನರನ್ನು ಹುಡುಕುವೆ. ನೀನು ಯೆಹೂದನ ಜನರಿಗೆ ಬಡಿದೆ, ಆದರೆ ಅವರಿಗೆ ಅದರಿಂದ ನೋವಾಗಲಿಲ್ಲ. ನೀನು ಅವರನ್ನು ಹಾಳುಮಾಡಿದೆ, ಆದರೆ ಅದರಿಂದ ಅವರು ಪಾಠವನ್ನೂ ಕಲಿಯಲಿಲ್ಲ. ಅವರು ತಮ್ಮ ದುಷ್ಕೃತ್ಯಗಳಿಗಾಗಿ ಪಶ್ಚಾತ್ತಾಪ ಪಡಲಿಲ್ಲ. ಅವರು ಬಹಳ ಹಟಮಾರಿಗಳಾದರು.

4 ಆದರೆ ನಾನು ನನ್ನೊಳಗೆ, ‘‘ಕೇವಲ ಸಾಮಾನ್ಯ ಜನರು ಇಷ್ಟು ಮೂರ್ಖರಾಗಿರಬಹುದು. ಅವರು ಯೆಹೋವನ ಮಾರ್ಗವನ್ನು ತಿಳಿದುಕೊಂಡಿಲ್ಲ. ಸಾಮಾನ್ಯ ಜನರಿಗೆ ತಮ್ಮ ದೇವರ ಉಪದೇಶ ತಿಳಿದಿಲ್ಲ.

5 ನಾನು ಯೆಹೂದದ ಜನನಾಯಕರ ಹತ್ತಿರ ಹೋಗಿ ಅವರೊಂದಿಗೆ ಮಾತನಾಡುವೆನು. ಜನನಾಯಕರು ಯೆಹೋವನ ಮಾರ್ಗಗಳನ್ನು ನಿಶ್ಚಯವಾಗಿ ತಿಳಿದುಕೊಂಡಿರುವರು. ಅವರು ತಮ್ಮ ಯೆಹೋವನ ನ್ಯಾಯವಿಧಿಗಳನ್ನು ಅರಿತುಕೊಂಡಿರುತ್ತಾರೆ’’ ಅಂದುಕೊಂಡಿದೆ. ಆದರೆ ಈ ಜನನಾಯಕರುಗಳೆಲ್ಲಾ ದೇವರ ಸೇವೆಯನ್ನು ತೊರೆದು ಬಿಟ್ಟಿದ್ದರು.’’

6 ಅವರು ದೇವರಿಗೆ ವಿರೋಧಿಗಳಾದರು. ಆದುದರಿಂದ ಕಾಡಿನ ಸಿಂಹವು ಅವರ ಮೇಲೆರಗುವುದು, ಮರಳುಗಾಡಿನ ತೋಳವು ಅವರನ್ನು ಕೊಂದು ಬಿಡುವದು. ಅವರ ನಗರಗಳ ಹತ್ತಿರ ಚಿರತೆಯು ಅಡಗಿಕೊಂಡಿದೆ. ನಗರದಿಂದ ಹೊರಗೆ ಬಂದವರನ್ನೆಲ್ಲ ಅದು ಚೂರುಚೂರು ಮಾಡುವುದು. ಯೆಹೂದದ ಜನರು ಮತ್ತೆ ಮತ್ತೆ ಪಾಪಗಳನ್ನು ಮಾಡಿದ್ದರಿಂದ ಹೀಗಾಗುವದು. ಅವರು ಅನೇಕ ಸಲ ಯೆಹೋವನಿಂದ ದೂರ ಹೋಗಿದ್ದಾರೆ.

7 ‘‘ಯೆಹೂದವೇ, ನಾನು ನಿನ್ನನ್ನು ಏಕೆ ಕ್ಷಮಿಸಬೇಕು? ಒಂದು ಕಾರಣವನ್ನಾದರೂ ಕೊಡು. ನಿನ್ನ ಮಕ್ಕಳು ನನ್ನನ್ನು ತೊರೆದಿದ್ದಾರೆ. ದೇವರುಗಳೇ ಅಲ್ಲದ ವಿಗ್ರಹಗಳಿಗೆ ಅವರು ಹರಕೆ ಹೊತ್ತಿದ್ದಾರೆ. ನಾನು ನಿನ್ನ ಮಕ್ಕಳಿಗೆ ಬೇಕಾದದ್ದನ್ನು ಕೊಟ್ಟೆ, ಆದರೂ ಅವರು ನನಗೆ ನಂಬಿಗಸ್ತರಾಗಿ ಉಳಿಯಲಿಲ್ಲ. ಅವರು ತಮ್ಮ ಹೆಚ್ಚಿನ ಸಮಯವನ್ನು ವೇಶ್ಯೆಯರ ಮನೆಗಳಲ್ಲಿ ಕಳೆದರು.

8 ಅವರು ಮನದಣಿಯುವ ಹಾಗೆ ತಿಂದು ಕೊಬ್ಬಿ ಕಾಮವೇರಿದ ಕುದುರೆಗಳಂತಿದ್ದಾರೆ. ಅವರು ನೆರೆಮನೆಯವನ ಹೆಂಡತಿಯನ್ನು ಕೆನೆತು ಕರೆಯುವ ಕುದುರೆಯಂತಿದ್ದಾರೆ.

9 ಹೀಗೆ ಮಾಡಿದ್ದಕ್ಕಾಗಿ ಯೆಹೂದದ ಜನರನ್ನು ನಾನು ಶಿಕ್ಷಿಸಬೇಕಲ್ಲವೇ?’’ ಯೆಹೋವನು ಹೇಳುತ್ತಾನೆ. ‘‘ಹೌದು, ನಾನು ಇಂಥಾ ಜನಾಂಗವನ್ನು ಶಿಕ್ಷಿಸಬೇಕು. ಅವರಿಗೆ ತಕ್ಕ ಶಿಕ್ಷೆಯನ್ನು ನಾನು ಕೊಡಬೇಕು.

10 ‘‘ಯೆಹೂದದ ದ್ರಾಕ್ಷಿಯ ಸಾಲು ಬಳ್ಳಿಗಳ ಬಳಿಗೆ
ಹೋಗಿರಿ, ಆ ಬಳ್ಳಿಗಳನ್ನು ಕತ್ತರಿಸಿರಿ. ಆದರೆ ಅವು
ಗಳನ್ನು ಸಂಪೂರ್ಣವಾಗಿ ನಾಶಮಾಡಬೇಡಿರಿ.
ಅವುಗಳ ಎಲ್ಲಾ ಕೊಂಬೆಗಳನ್ನು ಕತ್ತರಿಸಿ ಬಿಡಿ.
ಏಕೆಂದರೆ, ಈ ಕೊಂಬೆಗಳು ಯೆಹೋವನಿಗೆ
ಸಂಬಂಧಿಸಿಲ್ಲ.*
11 ಇಸ್ರೇಲ್ ಜನರೂ ಯೆಹೂದ ಜನರೂ ನನಗೆ
ಎಲ್ಲಾ ವಿಧದಲ್ಲಿ ದ್ರೋಹವನ್ನು ಮಾಡಿರುವರು’’
ಎಂದು ಯೆಹೋವನು ಹೇಳಿದನು.
12 ‘‘ಆ ಜನರು ಯೆಹೋವನ ಬಗ್ಗೆ ಸುಳ್ಳು ಹೇಳಿದ್ದಾರೆ.
‘ಯೆಹೋವನು ನಮಗೇನೂ ಮಾಡುವದಿಲ್ಲ.
ನಮಗೆ ಕೆಟ್ಟದ್ದೇನೂ ಆಗುವದಿಲ್ಲ. ಯಾವ
ಸೈನ್ಯವೂ ನಮ್ಮ ಮೇಲೆ ದಾಳಿ ಮಾಡುವದಿಲ್ಲ;
ನಾವೆಂದೂ ಉಪವಾಸ ಬೀಳುವದಿಲ್ಲ’ ಎಂದು
ಅವರು ಹೇಳಿದ್ದಾರೆ.
13 ‘‘ಆ ಸುಳ್ಳುಪ್ರವಾದಿಗಳು ಹೇಳಿದ್ದು ಕೇವಲ ಗಾಳಿಯ
ಮಾತು. ದೈವೋಕ್ತಿಯು ಅವರಲ್ಲಿಲ್ಲ, ಅವರಿಗೆ
ಕೇಡಾಗುವದು.’’
14 ಯೆಹೋವನೇ, ಸರ್ವಶಕ್ತನಾದ ದೇವರು. ಆತನು
ಇಂತೆನ್ನುತ್ತಾನೆ: ‘‘ನಾನು ಶಿಕ್ಷಿಸುವದಿಲ್ಲವೆಂದು ಆ
ಜನರು ಹೇಳಿದರು. ಆದುದರಿಂದ ಯೆರೆಮೀ
ಯನೇ, ನಾನು ನಿನಗೆ ಹೇಳುವ ಮಾತುಗಳು ಬೆಂಕಿ
ಯಂತೆ ಇರುವವು. ಅವರು ಸೌದೆಯಂತೆ ಆಗು
ವರು. ಬೆಂಕಿಯು ಎಲ್ಲಾ ಸೌದೆಯನ್ನು ಸುಟ್ಟು
ಬಿಡುವದು.’’
15 ಇದು ಯೆಹೋವನ ಮಾತು: ‘‘ಇಸ್ರೇಲ್
ವಂಶವೇ, ನಿಮ್ಮ ಮೇಲೆ ದಾಳಿ ಮಾಡುವದಕ್ಕೆ
ನಾನು ಬಹಳ ದೂರದಿಂದ ಒಂದು ಜನಾಂಗವನ್ನು
ತರುತ್ತೇನೆ. ಅದು ಒಂದು ಹಳೆಯ ಜನಾಂಗ,
ಅದೊಂದು ಪುರಾತನ ಕಾಲದಿಂದ ಬಂದ
ಜನಾಂಗ. ಆ ಜನಾಂಗದವರು ಮಾತನಾಡುವ
ಭಾಷೆ ನಿಮಗೆ ತಿಳಿಯುವದಿಲ್ಲ. ಅವರು ಹೇಳು
ವುದು ನಿಮಗೆ ಅರ್ಥವಾಗುವದಿಲ್ಲ.
16 ಅವರ ಬತ್ತಳಿಕೆಗಳು ಬಾಯಿತೆರೆದ ಗೋರಿಗ
ಳಂತಿವೆ. ಅವರ ಜನರೆಲ್ಲ ಶೂರರಾದ ಸೈನಿಕ
ರಾಗಿದ್ದಾರೆ.
17 ಆ ಸೈನಿಕರು ನೀವು ಬೆಳೆದ ಬೆಳೆಯನ್ನು ತಿಂದು
ಬಿಡುವರು. ಅವರು ನಿಮ್ಮೆಲ್ಲ ಆಹಾರವನ್ನು ತಿಂದು
ಬಿಡುವರು. ಅವರು ನಿಮ್ಮ ಗಂಡು ಮಕ್ಕಳನ್ನೂ
ಹೆಣ್ಣು ಮಕ್ಕಳನ್ನೂ ತಿಂದುಬಿಡುವರು (ನಾಶ
ಮಾಡುವರು). ಅವರು ನಿಮ್ಮ ದನಕರುಗಳ
ಹಿಂಡುಗಳನ್ನು, ಕುರಿಗಳ ಮಂದೆಗಳನ್ನು ತಿಂದು
ಬಿಡುವರು. ಅವರು ನಿಮ್ಮ ದ್ರಾಕ್ಷಿಗಳನ್ನೂ ನಿಮ್ಮ
ಅಂಜೂರಗಳನ್ನೂ ತಿಂದುಬಿಡುವರು. ಅವರು
ತಮ್ಮ ಖಡ್ಗಗಳಿಂದ ನಿಮ್ಮ ಭದ್ರವಾದ ನಗರಗ
ಳನ್ನು ನಾಶಮಾಡುವರು. ನೀವು ನಂಬಿಕೊಂಡಿದ್ದ
ನಿಮ್ಮ ಭದ್ರವಾದ ನಗರಗಳನ್ನು ಅವರು ಹಾಳು
ಮಾಡುತ್ತಾರೆ.’’
18 ‘‘ಯೆಹೂದವೇ ಆ ಭಯಂಕರ ದಿನಗಳು ಬಂದಾಗ
ನಾನು ನಿನ್ನನ್ನು ಸಂಪೂರ್ಣವಾಗಿ ನಾಶಮಾಡುವ
ದಿಲ್ಲ’’ ಎಂದು ಯೆಹೋವನು ಹೇಳಿದನು.
19 ‘‘ಯೆಹೂದದ ಜನರು ನಿನ್ನನ್ನು, ‘ಯೆರೆಮೀ
ಯನೇ, ನಮ್ಮ ದೇವರಾದ ಯೆಹೋವನು ನಮಗೆ
ಇಂಥಾ ಕೇಡನ್ನು ಏಕೆ ಮಾಡಿದನು’ ಎಂದು ಕೇಳ
ಬಹುದು. ಆಗ ಅವರಿಗೆ ಹೀಗೆ ಉತ್ತರ ಕೊಡು:
‘ಯೆಹೂದದ ಜನರಾದ ನೀವು ಯೆಹೋವನನ್ನು
ತೊರೆದಿದ್ದೀರಿ, ನಿಮ್ಮ ದೇಶದಲ್ಲಿ ನೀವು ಅನ್ಯರ
ವಿಗ್ರಹಗಳ ಸೇವೆ ಮಾಡುತ್ತಿದ್ದೀರಿ. ಆದ್ದರಿಂದಲೇ
ನೀವು ಪರದೇಶದಲ್ಲಿ ಪರದೇಶಿಯರ ಸೇವೆಯನ್ನು
ಮಾಡುವಿರಿ.’’’
20 ಯೆಹೋವನು ಇಂತೆನ್ನುತ್ತಾನೆ: ‘‘ಈ ಸಂದೇಶ
ವನ್ನು ಯಾಕೋಬನ ಜನಾಂಗದವರಿಗೆ ಸಾರಿರಿ.
ಈ ಸಂದೇಶವನ್ನು ಯೆಹೂದ ಜನಾಂಗಕ್ಕೆ ಹೇಳಿರಿ:
21 ‘ಬುದ್ಧಿ ಇಲ್ಲದ ಮೂರ್ಖಜನರೇ, ಈ ಸಂದೇಶ
ವನ್ನು ಕೇಳಿರಿ. ನಿಮಗೆ ಕಣ್ಣುಗಳಿವೆ ಆದರೆ ನೀವು
ನೋಡುವದಿಲ್ಲ, ನಿಮಗೆ ಕಿವಿಗಳಿವೆ ಆದರೆ ನೀವು
ಕೇಳುವದಿಲ್ಲ.
22 ನೀವು ನನಗೆ ಅಂಜುವುದಿಲ್ಲವೇ?’’’ ಇದು
ಯೆಹೋವನ ಸಂದೇಶ: ‘‘ನೀವು ನನ್ನ ಎದುರಿಗೆ
ಭಯದಿಂದ ನಡುಗುವುದಿಲ್ಲವೇ? ಸಾಗರಗಳಿಗೆ
ಗಡಿಯಂತೆ ದಡವನ್ನು ನಿರ್ಮಿಸಿದವನು ನಾನೇ.
ಸಮುದ್ರವು ನಿರಂತರವಾಗಿ ತನ್ನ ಸೀಮೆಯ
ಲ್ಲಿಯೇ ಹರಿಯಬೇಕೆಂದು ಹಾಗೆ ಮಾಡಿದೆ. ತೆರೆ
ಗಳು ದಡವನ್ನು ಅಪ್ಪಳಿಸಬಹುದು ಆದರೆ ಅವು
ಗಳು ಅದನ್ನು ನಾಶ ಮಾಡಲಾರವು. ತೆರೆಗಳು
ಬರುವಾಗ ಭೋರ್ಗರೆಯಬಹುದು, ಆದರೆ
ದಡವನ್ನು ದಾಟಿ ಹೋಗಲಾರವು.

23 ‘‘ಯೆಹೂದದ ಜನರು ಹಟಮಾರಿಗಳಾಗಿದ್ದಾರೆ.
ಅವರು ನನ್ನ ವಿರುದ್ಧ ಹೋಗುವದಕ್ಕೆ ಮಾರ್ಗಗ
ಳನ್ನು ಹುಡುಕುತ್ತಿದ್ದಾರೆ. ಅವರು ನನ್ನಿಂದ ತಿರುಗಿ
ಬಹಳ ದೂರ ಹೋಗಿಬಿಟ್ಟಿದ್ದಾರೆ.

---

**ಯೆಹೂದ … ಸಂಬಂಧಿಸಿಲ್ಲ** ಇಲ್ಲಿ ಯೆಹೂದದ ಜನರನ್ನು ದ್ರಾಕ್ಷಿಬಳ್ಳಿಗೆ ಹೋಲಿಸಲಾಗಿದೆ.

24 ಯೆಹೂದದ ಜನರು, ‘ನಾವು ನಮ್ಮ ದೇವರಾದ
ಯೆಹೋವನಿಗೆ ಭಯಭಕ್ತಿಯಿಂದಿರಬೇಕು.
ಆತನು ನಮಗೆ ಸರಿಸಮಯದಲ್ಲಿ ಮುಂಗಾರು
ಮತ್ತು ಹಿಂಗಾರು ಮಳೆಸುರಿಸುತ್ತಾನೆ. ಸರಿಸಮ
ಯಕ್ಕೆ ಫಸಲನ್ನು ಬರಮಾಡುತ್ತಾನೆ’ ಎಂದು ತಮ್ಮ
ಹೃದಯದಲ್ಲಿ ಅಂದುಕೊಳ್ಳುವದಿಲ್ಲ.
25 ಯೆಹೂದದ ಜನರೇ, ನೀವು ತಪ್ಪುಗಳನ್ನು
ಮಾಡಿರುವಿರಿ. ಆದುದರಿಂದಲೇ ಮಳೆಬೆಳೆಗಳು
ಆಗಿಲ್ಲ. ನಿಮ್ಮ ಪಾಪಗಳು ಯೆಹೋವನ ಆ
ಉತ್ತಮ ಕಾಣಿಕೆಗಳಿಂದ ನಿಮ್ಮನ್ನು ವಂಚಿಸಿವೆ.
26 ನಮ್ಮ ಜನರಲ್ಲಿ ದುಷ್ಟರಿದ್ದಾರೆ. ಅವರು ಪಕ್ಷಿಗಳ
ಬಲೆಯನ್ನು ಮಾಡುವ ಬಲೆಗಾರರಂತಿದ್ದಾರೆ.
ಅವರು ಬಲೆಗಳನ್ನು ಬೀಸುತ್ತಾರೆ. ಆದರೆ ಅವರು
ಹಿಡಿಯುವುದು ಪಕ್ಷಿಗಳನ್ನಲ್ಲ, ಮನುಷ್ಯರನ್ನೇ.
27 ಪಕ್ಷಿಗಳಿಂದ ತುಂಬಿರುವ ಪಂಜರದಂತೆ ಈ
ಕೇಡಿಗರ ಮನೆಗಳು ಸುಳ್ಳುಮೋಸಗಳಿಂದ
ತುಂಬಿವೆ. ಅವರ ಸುಳ್ಳುಮೋಸಗಳು ಅವರನ್ನು
ಶ್ರೀಮಂತರನ್ನಾಗಿಯೂ
ಶಕ್ತಿಶಾಲಿಗಳನ್ನಾಗಿಯೂ ಮಾಡಿವೆ.
28 ಅವರು ಮಾಡಿದ ದುಷ್ಕೃತ್ಯಗಳಿಂದ ಅವರು ಬೆಳೆ
ದಿದ್ದಾರೆ, ಕೊಬ್ಬಿದ್ದಾರೆ. ಅವರು ಮಾಡುವ
ದುಷ್ಕೃತ್ಯಗಳಿಗೆ ಕೊನೆಯೇ ಇಲ್ಲ. ಅವರು ಅನಾಥ
ಮಕ್ಕಳ ಪಕ್ಷವಹಿಸಿ ಮಾತನಾಡುವದಿಲ್ಲ. ಅವರು
ಅನಾಥರಿಗೆ ಸಹಾಯ ಮಾಡುವದಿಲ್ಲ. ಅವರು
ದಿಕ್ಕಿಲ್ಲದವರಿಗೆ ನ್ಯಾಯ ದೊರೆಯದಂತೆ
ಮಾಡುವರು.
29 ಇವುಗಳ ನಿಮಿತ್ತ ಯೆಹೂದದ ಜನರನ್ನು ನಾನು
ಶಿಕ್ಷಿಸಬೇಕಲ್ಲವೆ?’’ ಯೆಹೋವನು ಇಂತೆನ್ನು
ತ್ತಾನೆ: ‘‘ಇಂಥ ಜನಾಂಗವನ್ನು ನಾನು ದಂಡಿಸ
ಬೇಕೆಂಬುದು ನಿಮಗೆ ಗೊತ್ತು. ನಾನು ಅವರಿಗೆ
ತಕ್ಕ ಶಿಕ್ಷೆಯನ್ನು ಕೊಡಬೇಕು.’’
30 ಯೆಹೋವನು, ‘‘ಯೆಹೂದ ಪ್ರದೇಶದಲ್ಲಿ
ಭಯಂಕರವಾದ ಮತ್ತು ಅಸಹ್ಯವಾದ ಸಂಗತಿಗಳು
ನಡೆದಿವೆ.
31 ಪ್ರವಾದಿಗಳು ಸುಳ್ಳು ಹೇಳುತ್ತಿದ್ದಾರೆ. ಯಾಜಕರು
ಅಧಿಕಾರವನ್ನು ತಮ್ಮ ಕೈಗೆ ತೆಗೆದುಕೊಳ್ಳುತ್ತಿ
ದ್ದಾರೆ.* ನನ್ನ ಜನರು ಇದನ್ನೇ ಮೆಚ್ಚಿಕೊಳ್ಳುತ್ತಿ
ದ್ದಾರೆ ಆದರೆ ದಂಡನೆಯ ಸಮಯ ಬಂದಾಗ
ನೀವು ಏನು ಮಾಡುವಿರಿ?’’ ಎಂದನು.

**ಯಾಜಕರು … ತೆಗೆದುಕೊಳ್ಳುತ್ತಿದ್ದಾರೆ** ಇದು ಈ ಅರ್ಥವನ್ನೂ ಕೊಡ ಬಲ್ಲದು: ‘‘ತಾವು ಯಾವ ಕಾರ್ಯಕ್ಕಾಗಿ ಆರಿಸಲ್ಪಟ್ಟರೋ ಆ ಕಾರ್ಯ ವನ್ನು ಯಾಜಕರು ಮಾಡುತ್ತಿಲ್ಲ.’’

## ಶತ್ರುಗಳು ಜೆರುಸಲೇಮ್ ನಗರವನ್ನು ಮುತ್ತಿದರು

6 ಬೆನ್ಯಾಮೀನನ ವಂಶದವರೇ, ನಿಮ್ಮ ಪ್ರಾಣ
ರಕ್ಷಣೆಗಾಗಿ ಓಡಿಹೋಗಿರಿ; ಜೆರುಸಲೇಮ್
ನಗರದಿಂದ ಓಡಿಹೋಗಿರಿ. ತೆಕೋವ ನಗರದಲ್ಲಿ
ಯುದ್ಧದ ತುತ್ತೂರಿಗಳನ್ನು ಊದಿರಿ; ಬೇತ್
ಹಕ್ಕೆರೆಮಿನಲ್ಲಿ ಎಚ್ಚರಿಕೆಯ ಧ್ವಜಗಳನ್ನು ಹಾರಿ
ಸಿರಿ. ಉತ್ತರ ದಿಕ್ಕಿನಿಂದ ವಿಪತ್ತು ಬರುತ್ತಿರುವುದ
ರಿಂದ ಇವೆಲ್ಲವನ್ನು ಮಾಡಿರಿ. ಭಯಂಕರವಾದ
ವಿನಾಶವು ನಿಮಗೆ ಬರುತ್ತಿದೆ.
2 ಚೀಯೋನ್ ಕುಮಾರಿಯೇ,* ನೀನು ಬಹು
ಸುಂದರವಾಗಿಯೂ ಮೃದುವಾಗಿಯೂ ಇರುವೆ.
3 ಕುರುಬರು ಜೆರುಸಲೇಮಿಗೆ ಬರುತ್ತಾರೆ. ಮತ್ತು
ಕುರಿಮಂದೆಗಳನ್ನು ತರುತ್ತಾರೆ. ಅದರ ಸುತ್ತಲೂ
ತಮ್ಮ ಗುಡಾರಗಳನ್ನು ಹಾಕಿಕೊಳ್ಳುತ್ತಾರೆ. ಪ್ರತಿ
ಯೊಬ್ಬ ಕುರುಬನು ತನ್ನ ಕುರಿಹಿಂಡನ್ನು ನೋಡಿ
ಕೊಳ್ಳುತ್ತಾನೆ.
4 ‘‘ಜೆರುಸಲೇಮಿನ ಮೇಲೆ ಧಾಳಿ ಮಾಡುವದಕ್ಕೆ ಸಿದ್ಧ
ರಾಗಿರಿ. ಏಳಿರಿ, ನಾವು ನಗರವನ್ನು ಮಧ್ಯಾಹ್ನ
ದಲ್ಲಿಯೇ ಮುತ್ತೋಣ. ಆದರೆ ಈಗಾಗಲೇ
ಹೊತ್ತಾಗಿದೆ. ಸಾಯಂಕಾಲದ ನೆರಳುಗಳು
ವಿಸ್ತಾರಗೊಳ್ಳುತಿವೆ.
5 ಏಳಿರಿ, ನಾವು ರಾತ್ರಿಯಲ್ಲಿ ನಗರದ ಮೇಲೆ ದಾಳಿ
ಮಾಡೋಣ. ನಾವು ಜೆರುಸಲೇಮಿನ ಭದ್ರವಾದ
ರಕ್ಷಣಾ ಸ್ಥಳಗಳನ್ನು ನಾಶಮಾಡೋಣ.’’
6 ಸರ್ವಶಕ್ತನಾದ ಯೆಹೋವನು ಹೀಗೆ ಹೇಳಿದನು:
‘‘ಜೆರುಸಲೇಮಿನ ಸುತ್ತಮುತ್ತಲಿನ ಮರಗಳನ್ನು
ಕಡಿದುಹಾಕಿರಿ; ಜೆರುಸಲೇಮಿನ ಎದುರಿಗೆ ಒಂದು
ದಿಬ್ಬ ನಿರ್ಮಿಸಿರಿ. ನಗರವನ್ನು ದಂಡಿಸಬೇಕು.
ನಗರದ ಒಳಗಡೆ ದಬ್ಬಾಳಿಕೆಯ ಹೊರತು
ಮತ್ತೇನಿಲ್ಲ.
7 ಬಾವಿಯಲ್ಲಿ ಹೊಸನೀರು ಬರುವಂತೆ ಜೆರುಸಲೇ
ಮಿನಲ್ಲಿ ಹೊಸ ಹೊಸ ದುಷ್ಟತನ ಉಂಟಾಗುತ್ತದೆ.
ಈ ಪಟ್ಟಣದಲ್ಲಿ ಬಲಾತ್ಕಾರ ಮತ್ತು ವಿನಾಶಗಳೇ
ಕೇಳಿಬರುತ್ತವೆ. ನನಗೆ ಯಾವಾಗಲೂ ಜೆರುಸ
ಲೇಮಿನ ರೋಗ ಮತ್ತು ಗಾಯಗಳು ಕಣ್ಣಿಗೆ
ಬೀಳುತ್ತವೆ.
8 ಜೆರುಸಲೇಮ್ ನಗರವೇ, ಈ ಎಚ್ಚರಿಕೆಯ ನುಡಿ
ಗಳನ್ನು ಕೇಳು. ನೀನು ಕೇಳದಿದ್ದರೆ ನಾನು ನಿನಗೆ
ವಿಮುಖನಾಗುವೆ. ನಾನು ನಿನ್ನ ಪ್ರದೇಶವನ್ನು
ಒಂದು ಮರಳುಗಾಡಾಗಿ ಮಾಡುತ್ತೇನೆ. ಅಲ್ಲಿ
ಯಾರೂ ವಾಸಮಾಡಲು ಸಾಧ್ಯವಾಗದು.’’

**ಚೀಯೋನ್ ಕುಮಾರಿಯೇ** ಜೆರುಸಲೇಮ್ ಪಟ್ಟಣವೇ.

9 ಸರ್ವಶಕ್ತನಾದ ಯೆಹೋವನು ಹೀಗೆ ಹೇಳುತ್ತಾನೆ: ''ದೇಶದಲ್ಲಿ ಅಳಿದುಳಿದ ಇಸ್ರೇಲಿಯರನ್ನು ಒಟ್ಟಾಗಿ ಸೇರಿಸಿರಿ. ದ್ರಾಕ್ಷಿ ತೋಟದಲ್ಲಿ ಕೊನೆಯ ದ್ರಾಕ್ಷಿಯನ್ನು ಕೀಳುವಂತೆ ಅವರನ್ನು ಒಟ್ಟಾಗಿ ಸೇರಿಸಿ. ಕೊಯ್ಲುಗಾರನು ಪ್ರತಿಯೊಂದು ಬಳ್ಳಿಯನ್ನು ನೋಡಿ ದ್ರಾಕ್ಷಿ ಕೀಳುವಂತೆ ನೀವು ಸೂಕ್ಷ್ಮವಾಗಿ ಗಮನಿಸಿ ಅವರನ್ನು ಒಟ್ಟಾಗಿ ಸೇರಿಸಿರಿ.''

10 ನಾನು ಯಾರೊಂದಿಗೆ ಮಾತನಾಡಲಿ? ನಾನು ಯಾರಿಗೆ ಎಚ್ಚರಿಕೆಯ ನುಡಿಗಳನ್ನು ಹೇಳಲಿ? ನನ್ನ ಮಾತನ್ನು ಯಾರು ಕೇಳುತ್ತಾರೆ? ಇಸ್ರೇಲಿನ ಜನರು ತಮ್ಮ ಕಿವಿಗಳನ್ನು ಮುಚ್ಚಿಕೊಂಡಿದ್ದಾರೆ. ಅವರು ನನ್ನ ಎಚ್ಚರಿಕೆಯ ನುಡಿಗಳನ್ನು ಕೇಳಲಾರರು. ಜನರಿಗೆ ಯೆಹೋವನ ಉಪದೇಶ ರುಚಿಸುವದಿಲ್ಲ. ಅವರು ಯೆಹೋವನ ನುಡಿಗಳನ್ನು ಕೇಳಬಯಸುವದಿಲ್ಲ.

11 ಯೆಹೋವನ ರೋಷವು ನನ್ನಲ್ಲಿ ತುಂಬಿತುಳುಕುತ್ತಿದೆ, ತಡೆದು ತಡೆದು ನನಗೆ ಸಾಕಾಗಿದೆ. ''ಬೀದಿಯಲ್ಲಾಡುವ ಮಕ್ಕಳ ಮೇಲೆ ಅದನ್ನು ಹೊಯ್ದು ಬಿಡಬೇಕು. ಒಂದೆಡೆ ಸೇರುವ ತರುಣರ ಮೇಲೆ ಅದನ್ನು ಹೊಯ್ದುಬಿಡಬೇಕು. ಗಂಡ ಹೆಂಡತಿಯರಿಬ್ಬರನ್ನು ಅಪಹರಿಸಲಾಗುವುದು. ಮುದುಕರನ್ನೂ ಮುಪ್ಪಿನ ಮುದುಕರನ್ನೂ ಅಪಹರಿಸಲಾಗುವುದು.

12 ಅವರ ಮನೆಗಳನ್ನು ಬೇರೆಯವರಿಗೆ ಕೊಡಲಾಗುವುದು. ಅವರ ಹೊಲಗಳನ್ನೂ ಅವರ ಹೆಂಡಂದಿರನ್ನೂ ಬೇರೆಯವರಿಗೆ ಕೊಡಲಾಗುವುದು. ನಾನು ನನ್ನ ಕೈ ಎತ್ತಿ ಯೆಹೂದದ ಜನರನ್ನು ದಂಡಿಸುವೆನು.'' ಇದು ಯೆಹೋವನ ಸಂದೇಶ.

13 ''ಇಸ್ರೇಲಿನ ಎಲ್ಲಾ ಜನರಿಗೆ ಹೆಚ್ಚಾಗಿ ಹಣಬೇಕು. ಚಿಕ್ಕವರು ಮೊದಲುಗೊಂಡು ದೊಡ್ಡವರತನಕ ಎಲ್ಲರೂ ಲಾಭಕ್ಕಾಗಿ ಆಸೆಪಡುತ್ತಾರೆ. ಪ್ರವಾದಿಗಳು ಮತ್ತು ಯಾಜಕರು ಸಹ ಮೋಸಗಾರರಾಗಿದ್ದಾರೆ.

14 ಪ್ರವಾದಿಗಳು ಮತ್ತು ಯಾಜಕರು ನನ್ನ ಜನರಿಗಾದ ದೊಡ್ಡ ಗಾಯಗಳಿಗೆ ಚಿಕ್ಕಗಾಯಗಳಿಗೋ ಎಂಬಂತೆ ಚಿಕಿತ್ಸೆ ಮಾಡುತ್ತಾರೆ. ವಾಸಿಯಾಗಿಲ್ಲದಿದ್ದರೂ 'ವಾಸಿಯಾಗಿದೆ' ಎನ್ನುತ್ತಾರೆ.

15 ಪ್ರವಾದಿಗಳು ಮತ್ತು ಯಾಜಕರು ತಾವು ಮಾಡುವ ದುಷ್ಕೃತ್ಯಗಳಿಗಾಗಿ ನಾಚಿಕೆಪಡಬೇಕು. ಆದರೆ ಅವರು ನಾಚಿಕೆಪಡುವದೇ ಇಲ್ಲ. ತಮ್ಮ ಪಾಪಕಾರ್ಯಗಳಿಗಾಗಿ ಸಂಕೋಚಪಡುವದು ಸಹ ಅವರಿಗೆ ಗೊತ್ತಿಲ್ಲ. ಆದುದರಿಂದ ಬೇರೆಯವರಂತೆ ಅವರನ್ನೂ ಶಿಕ್ಷಿಸಲಾಗುವುದು. ನಾನು ಅವರನ್ನು ಶಿಕ್ಷಿಸಿದಾಗ ಅವರನ್ನು ನೆಲಕ್ಕೆ ಎಸೆಯಲಾಗುವದು'' ಎಂದು ಯೆಹೋವನು ಅನ್ನುತ್ತಾನೆ.

16 ಯೆಹೋವನು ಹೀಗೆ ಹೇಳುತ್ತಾನೆ: ''ಎರಡು ರಸ್ತೆಗಳು ಕೂಡುವಲ್ಲಿ ನಿಂತು ನೋಡಿರಿ. ಒಳ್ಳೆಯ ರಸ್ತೆ ಎಲ್ಲಿದೆ? ಎಂದು ಕೇಳಿರಿ. ಆ ರಸ್ತೆಯನ್ನು ಹಿಡಿದು ನಡೆಯಿರಿ. ಹಾಗೆ ಮಾಡಿದರೆ ನಿಮಗೆ ವಿಶ್ರಾಂತಿ ಸಿಕ್ಕುವದು. 'ಆದರೆ ನಾವು ಒಳ್ಳೆಯ ಹಾದಿಯ ಮೇಲೆ ನಡೆಯುವುದಿಲ್ಲ' ಎಂದು ನೀವು ಹೇಳಿದ್ದೀರಿ.

17 ನಾನು ನಿಮ್ಮನ್ನು ನೋಡಿಕೊಳ್ಳುವದಕ್ಕೆ ಕಾವಲುಗಾರರನ್ನು ನೇಮಿಸಿದೆ. ನಾನು ಅವರಿಗೆ 'ಯುದ್ಧ ತುತ್ತೂರಿಯ ನಾದವನ್ನು ಕೇಳಿರಿ' ಎಂದು ಹೇಳಿದೆ. ಆದರೆ ಅವರು 'ನಾವು ಕೇಳುವದಿಲ್ಲ' ಅಂದರು.

18 ಸರ್ವ ಜನಾಂಗಗಳೇ ಕೇಳಿರಿ, ಜನಸಮೂಹಗಳೇ ಗಮನಿಸಿರಿ. ಯೆಹೂದದ ಜನರಿಗೆ ನಾನು ಮಾಡುವುದನ್ನು ಕೇಳಿರಿ.

19 ಭೂಲೋಕದ ಜನರೇ, ಕೇಳಿರಿ, ಆ ಜನರು ಮಾಡಿದ ಎಲ್ಲಾ ಕುಯುಕ್ತಿಗಳಿಗಾಗಿ ನಾನು ಯೆಹೂದ ಜನರಿಗೆ ವಿನಾಶವನ್ನು ತರುವೆನು. ಅವರು ನನ್ನ ಸಂದೇಶಗಳಿಗೆ ಗಮನ ಕೊಡದೆ ಇದ್ದುದರಿಂದ, ಅವರು ನನ್ನ ಧರ್ಮಶಾಸ್ತ್ರವನ್ನು ಅಸಡ್ಡೆ ಮಾಡಿದ್ದರಿಂದ ಇದೆಲ್ಲ ನಡೆಯುವುದು.''

20 ಯೆಹೋವನು ಹೇಳುವುದೇನಂದರೆ, ''ನೀವು ನನ್ನ ಸಲುವಾಗಿ ಶೆಬ* ದೇಶದಿಂದ ಧೂಪವನ್ನು ಏಕೆ ತರುವಿರಿ? ನೀವು ದೂರದೇಶದ ಒಳ್ಳೆಯ ಬಜೆಯನ್ನು ನನಗೆ ಅರ್ಪಿಸುವದರಿಂದ ಪ್ರಯೋಜನವೇನು? ನಿಮ್ಮ ಹೋಮಗಳಿಂದ ನನಗೆ ಸಂತೋಷವಾಗುವದಿಲ್ಲ. ನಿಮ್ಮ ಯಜ್ಞಗಳು ನನಗೆ ಇಷ್ಟವಿಲ್ಲ.''

21 ''ನಾನು ಯೆಹೂದದ ಜನರೆದುರಿಗೆ ಸಮಸ್ಯೆಗಳನ್ನು ಒಡ್ಡುವೆನು. ಅವುಗಳು ಜನರು ಎಡವಿಬೀಳುವ ಕಲ್ಲುಗಳಂತಾಗುವವು. ತಂದೆಗಳೂ ಮಕ್ಕಳೂ ಅವುಗಳಿಂದ ಎಡವಿಬೀಳುವರು. ಸ್ನೇಹಿತರು ಮತ್ತು ನೆರೆಹೊರೆಯುವರು ಅವುಗಳಿಂದ ನಾಶವಾಗುವರು'' ಅಂದನು.

22 ಯೆಹೋವನು ಹೇಳುವುದೇನಂದರೆ: ''ಉತ್ತರ ದಿಕ್ಕಿನಿಂದ ಒಂದು ಸೈನ್ಯವು ಬರಲಿದೆ. ಭೂಮಿಯ ಬಹು ದೂರದ ಸ್ಥಳಗಳಿಂದ ಒಂದು ಮಹಾ ಜನಾಂಗವು ಬರಲಿದೆ.

---

**ಶೆಬ** ಇಸ್ರೇಲಿನ ದಕ್ಷಿಣದ ಒಂದು ಪ್ರದೇಶ. ಆ ಕಾಲದಲ್ಲಿ ಸುಗಂಧ ದ್ರವ್ಯಗಳ ವ್ಯಾಪಾರಕ್ಕೆ ಪ್ರಸಿದ್ಧಿಯಾಗಿತ್ತು. ಈಗ ಆ ಭಾಗ ಸೌದಿ ಅರೆಬಿಯಾದ ಭಾಗವಾಗಿದೆ.

23 ಆ ಸೈನಿಕರು ಬಿಲ್ಲುಗಳನ್ನು ಮತ್ತು ಈಟಿಗಳನ್ನು ಹಿಡಿದುಕೊಂಡಿದ್ದಾರೆ. ಅವರು ಕ್ರೂರಿಗಳಾಗಿದ್ದಾರೆ. ಅವರು ನಿಷ್ಕರುಣಿಗಳಾಗಿದ್ದಾರೆ. ಅವರು ಬಲಶಾಲಿಗಳಾಗಿದ್ದಾರೆ. ಅವರು ತಮ್ಮ ಕುದುರೆ ಹತ್ತಿ ಬರುವಾಗ ಸಮುದ್ರದ ಗರ್ಜನೆಯಂತೆ ಶಬ್ದ ಕೇಳಿಬರುತ್ತದೆ. ಚೀಯೋನ್ ಕುಮಾರಿಯೇ,* ಆ ಸೈನ್ಯವು ಯುದ್ಧಕ್ಕಾಗಿ ಬರುತ್ತಿದೆ. ಆ ಸೈನ್ಯವು ನಿನ್ನ ಮೇಲೆ ಧಾಳಿಮಾಡಲು ಬರುತ್ತಿದೆ.''
24 ಆ ಸೈನ್ಯದ ಬಗ್ಗೆ ಸಮಾಚಾರವನ್ನು ನಾವು ಕೇಳಿದ್ದೇವೆ. ಭಯದಿಂದ ನಾವು ಅಸಹಾಯಕರಾಗಿದ್ದೇವೆ. ಕಷ್ಟಗಳಲ್ಲಿ ನಾವು ಸಿಕ್ಕಿಹಾಕ್ಕಿಕೊಂಡಿದ್ದೇವೆ. ಸ್ತ್ರೀಯರ ಪ್ರಸವ ವೇದನೆಯಂತಿರುವ ಯಾತನೆಯಿಂದ ನಾವು ಬಳಲುತ್ತಿದ್ದೇವೆ.
25 ಊರ ಹೊರಗೆ ಹೋಗಬೇಡಿರಿ. ರಸ್ತೆಗಳ ಮೇಲೆ ಹೋಗಬೇಡಿರಿ. ಏಕೆಂದರೆ ಶತ್ರುವಿನ ಕೈಯಲ್ಲಿ ಖಡ್ಗವಿದೆ. ಎಲ್ಲಾ ಕಡೆಗೂ ಅಪಾಯವಿದೆ.
26 ಅಯ್ಯೋ ನನ್ನ ಜನರೇ, ಗೋಣಿತಟ್ಟನ್ನು* ಸುತ್ತಿಕೊಂಡು ಬೂದಿಯಲ್ಲಿ ಹೊರಳಾಡಿರಿ. ಸತ್ತವರಿಗಾಗಿ ದೊಡ್ಡ ಧ್ವನಿಯಲ್ಲಿ ರೋದಿಸಿರಿ. ಇದ್ದೊಬ್ಬ ಮಗನನ್ನು ಕಳೆದುಕೊಂಡಂತೆ ಘೋರ ಪ್ರಲಾಪ ಮಾಡಿರಿ. ವಿನಾಶಕನು ತಕ್ಷಣ ನಮ್ಮ ಮೇಲೆರಗುವನು.

27 ''ಯೆರೆಮೀಯನೆ, ನಾನು ನಿನ್ನನ್ನು ಒಬ್ಬ ಲೋಹ ಪರೀಕ್ಷಕನನ್ನಾಗಿ ನೇಮಿಸಿದ್ದೇನೆ. ನೀನು ನನ್ನ ಜನರನ್ನು ಪರೀಕ್ಷಿಸು. ಅವರ ವ್ಯವಹಾರವನ್ನು ಅವಲೋಕಿಸು.
28 ಅವರೆಲ್ಲರು ನನಗೆ ವಿರುದ್ಧವಾಗಿ ದಂಗೆ ಎದ್ದಿದ್ದಾರೆ; ಅವರು ಬಹಳ ಹಟಮಾರಿಗಳಾಗಿದ್ದಾರೆ. ಅವರು ಜನಗಳ ಬಗ್ಗೆ ಅಪಪ್ರಚಾರ ಮಾಡುತ್ತಾ ತಿರುಗಾಡುತ್ತಾರೆ. ಅವರು ಬಣ್ಣಗುಂದಿದ ತುಕ್ಕು ಹಿಡಿದ ಕಂಚಿನಂತೆಯೂ ಕಬ್ಬಿಣದಂತೆಯೂ ಇದ್ದಾರೆ.
29 ಅವರನ್ನು ತಿದ್ದುವದು ಬೆಳ್ಳಿಯನ್ನು ಪವಿತ್ರಗೊಳಿಸಲು ಪ್ರಯತ್ನ ಮಾಡಿದ ಅಕ್ಕಸಾಲಿಗನಂತಾಗುವುದು. ತಿದಿಗಳು* ಭರದಿಂದ ಬೀಸಲು ಬೆಂಕಿಯು ಧಗಧಗಿಸಿತು. ಆದರೆ ಆ ಬೆಂಕಿಯಿಂದ ಕೇವಲ ಸೀಸವು ಹೊರಬಂದಿತು. ಬೆಳ್ಳಿಯನ್ನು ಶುದ್ಧೀಕರಿಸಲು ಮಾಡಿದ ಪ್ರಯತ್ನ ಕೇವಲ ವ್ಯರ್ಥವಾಯಿತು. ಅದರಂತೆಯೇ ನನ್ನ ಜನರಿಂದ ದುಷ್ಟತನವನ್ನು ತೆಗೆಯಲಾಗಲಿಲ್ಲ.
30 ನನ್ನ ಜನರನ್ನು 'ತಿರಸ್ಕರಿಸಲಾದ ಬೆಳ್ಳಿ' ಎಂದು ಕರೆಯಲಾಗುವದು. ಏಕೆಂದರೆ ಯೆಹೋವನು ಅವರನ್ನು ಸ್ವೀಕರಿಸಲಿಲ್ಲ.''

## ಯೆಹೋವನ ಆಲಯದಲ್ಲಿ ಯೆರೆಮೀಯನ ಧರ್ಮೋಪದೇಶ

7 ಯೆರೆಮೀಯನಿಗೆ ಯೆಹೋವನ ಸಂದೇಶ
ಹೀಗಿತ್ತು: 2ಯೆರೆಮೀಯನೇ, ಯೆಹೋವನ
ಆಲಯದ ಹೆಬ್ಬಾಗಿಲಿನ ಹತ್ತಿರ ನಿಂತುಕೊಂಡು ಈ
ಸಂದೇಶವನ್ನು ಸಾರು.
''ಇದು ಯೆಹೋವನ ಸಂದೇಶ. ಯೆಹೂದದ
ಜನರೆಲ್ಲರೇ, ಯೆಹೋವನನ್ನು ಆರಾಧಿಸಲು ಈ ದ್ವಾರ
ದಿಂದ ಪ್ರವೇಶ ಮಾಡುವ ಜನರೇ, ಈ ಸಂದೇಶವನ್ನು
ಕೇಳಿರಿ. 3ಯೆಹೋವನು ಇಸ್ರೇಲರ ದೇವರು. ಸರ್ವಶಕ್ತ
ನಾದ ದೇವರು ಹೀಗೆ ಹೇಳುತ್ತಾನೆ: 'ನಿಮ್ಮ ನಡತೆಯನ್ನು
ಬದಲಾಯಿಸಿರಿ; ಒಳ್ಳೆಯದನ್ನು ಮಾಡಿರಿ. ಆಗ ನೀವು
ಇಲ್ಲಿರಲು ಆಸ್ಪದ ಕೊಡುತ್ತೇನೆ. 4ಕೆಲವರು ಹೇಳುವ
ಸುಳ್ಳುಗಳನ್ನು ನಂಬಬೇಡಿರಿ. ಅವರು ''ಇದು
ಯೆಹೋವನ ಆಲಯ, ಯೆಹೋವನ ಆಲಯ,
ಯೆಹೋವನ ಆಲಯ''* ಎಂದು ಹೇಳುತ್ತಾರೆ. 5ನೀವು
ನಿಮ್ಮ ನಡತೆಯನ್ನು ಬದಲಾಯಿಸಿ ಸತ್ಕಾರ್ಯಗಳನ್ನು
ಮಾಡಿದರೆ ನಾನು ನಿಮಗೆ ಈ ಸ್ಥಳದಲ್ಲಿ ವಾಸಿಸಲು
ಆಸ್ಪದಕೊಡುತ್ತೇನೆ. ನೀವು ಒಬ್ಬರಿಗೊಬ್ಬರು ನ್ಯಾಯ
ವಾದ ರೀತಿಯಲ್ಲಿ ವ್ಯವಹರಿಸಬೇಕು. 6ಅಪರಿಚಿತ
ರೊಂದಿಗೂ ನೀವು ನ್ಯಾಯಬದ್ಧವಾಗಿ ವರ್ತಿಸಬೇಕು.
ವಿಧವೆಯರಿಗೆ ಮತ್ತು ಅನಾಥರಿಗೆ ನೀವು ಒಳ್ಳೆಯದನ್ನು
ಮಾಡಬೇಕು. ನಿರ್ದೋಷಿಗಳ ಕೊಲೆ ಮಾಡಬಾರದು;
ಅನ್ಯದೇವರುಗಳನ್ನು ಸೇವಿಸಬಾರದು. ಏಕೆಂದರೆ
ಅವುಗಳು ನಿಮ್ಮ ಜೀವನವನ್ನು ಹಾಳು ಮಾಡುತ್ತವೆ.
7ನೀವು ನನ್ನ ಆಜ್ಞೆಯನ್ನು ಪಾಲಿಸಿದರೆ ಇಲ್ಲಿರಲು ನಾನು
ನಿಮಗೆ ಆಸ್ಪದ ಕೊಡುತ್ತೇನೆ. ನಾನು ಈ ಪ್ರದೇಶವನ್ನು
ನಿಮ್ಮ ಪೂರ್ವಿಕರಿಗೆ ಶಾಶ್ವತವಾದ ಸ್ವಾಸ್ತ್ಯವಾಗಿ
ಕೊಟ್ಟಿದ್ದೇನೆ.
8'''ನೀವು ಸುಳ್ಳುಗಳನ್ನು ನಂಬುತ್ತಿದ್ದೀರಿ, ಆ ಸುಳ್ಳು
ಗಳು ಹುರುಳಿಲ್ಲದವುಗಳಾಗಿವೆ. 9ನೀವು ಕದಿಯುವುದಿ
ಲ್ಲವೇ? ಕೊಲೆಗಳನ್ನು ಮಾಡುವುದಿಲ್ಲವೇ? ನೀವು

**ಚೀಯೋನ್ ಕುಮಾರಿ** ಜೆರುಸಲೇಮ್ ನಗರದ ಇನ್ನೊಂದು ಹೆಸರು.

**ಗೋಣಿತಟ್ಟು** ದುಃಖ ಸೂಚಿಸುವುದಕ್ಕೆ ಸುತ್ತಿಕೊಳ್ಳುವ ವಸ್ತ್ರ.

**ತಿದಿ** ಬೆಂಕಿಗೆ ಗಾಳಿ ಬೀಸುವಂತೆ ಮಾಡುವ ಉಪಕರಣ.

**ಯೆಹೋವನ ಆಲಯ** ಜೆರುಸಲೇಮಿನಲ್ಲಿ ದೇವಾಲಯವಿದ್ದ ಕಾರಣ ದೇವರು ಜೆರುಸಲೇಮನ್ನು ರಕ್ಷಿಸುತ್ತಾನೆ ಎಂದು ಅನೇಕರು ತಿಳಿದುಕೊಂಡಿದ್ದರು. ಜನರು ಎಷ್ಟೇ ಕೆಟ್ಟವರಾಗಿದ್ದರೂ ಸರಿ, ದೇವರು ಜೆರುಸಲೇಮನ್ನು ಕಾಪಾಡುತ್ತಾನೆ ಎಂಬುದು ಅವರ ಭಾವನೆಯಾಗಿತ್ತು.

ವ್ಯಭಿಚಾರ ಮಾಡುವುದಿಲ್ಲವೇ? ನೀವು ಅನ್ಯರ ಮೇಲೆ
ಸುಳ್ಳು ದೋಷಾರೋಪಣೆ ಮಾಡುವುದಿಲ್ಲವೇ? ನೀವು
ಸುಳ್ಳು ದೇವರಾದ ಬಾಳನನ್ನು ಪೂಜಿಸಿ ಅನ್ಯದೇವರುಗಳ
ಅನುಯಾಯಿಗಳಾಗಿಲ್ಲವೇ? [10]ನೀವು ಈ ಪಾಪಗಳನ್ನು
ಮಾಡುತ್ತಿದ್ದರೂ ನನ್ನ ಹೆಸರಿನಿಂದ ಕರೆಯಲ್ಪಡುವ ಈ
ಆಲಯದಲ್ಲಿ ನನ್ನ ಎದುರಿಗೆ ನಿಲ್ಲಬಹುದೆಂದು ಭಾವಿಸಿ
ರುವಿರಾ? ನೀವು ನನ್ನ ಸಮ್ಮುಖದಲ್ಲಿ ನಿಂತುಕೊಂಡು,
‘‘ನಾವು ಸುರಕ್ಷಿತರಾಗಿದ್ದೇವೆ’’ ಎಂದು ಹೇಳಿಕೊಂಡು
ನಿಮ್ಮ ದುಷ್ಕೃತ್ಯಗಳನ್ನು ಮುಂದುವರಿಸಬಹುದೆಂದು
ಭಾವಿಸಿರುವಿರಾ? [11]ಈ ಪವಿತ್ರ ಆಲಯವನ್ನು* ನನ್ನ
ಹೆಸರಿನಿಂದ ಕರೆಯಲಾಗಿದೆ. ಈ ಆಲಯವು ನಿಮ್ಮ
ದೃಷ್ಟಿಯಲ್ಲಿ ಕೇವಲ ಕಳ್ಳರು ಅಡಗುವ ಸ್ಥಳವಾಯಿತೇ?
ನಾನು ನಿಮ್ಮ ವ್ಯವಹಾರವನ್ನೆಲ್ಲ ನೋಡುತ್ತಿದ್ದೇನೆ’’
ಎಂಬುದು ಯೆಹೋವನಾದ ನನ್ನ ನುಡಿ.

[12]‘‘ಯೆಹೂದದ ಜನರಾದ ನೀವು ಈಗ ಶೀಲೋವಿಗೆ
ಹೋಗಿರಿ. ನಾನು ಮೊದಲು ನನ್ನ ಹೆಸರಿಗಾಗಿ ಆಲಯ
ವನ್ನು ಮಾಡಿದ ಸ್ಥಳಕ್ಕೆ ಹೋಗಿರಿ. ಇಸ್ರೇಲಿನ ಜನರು ಸಹ
ದುಷ್ಕೃತ್ಯಗಳನ್ನು ಮಾಡಿದರು. ಅವರು ಮಾಡಿದ ದುಷ್ಕೃತ್ಯ
ಗಳ ಕಾರಣ ನಾನು ಆ ಸ್ಥಳಕ್ಕೆ ಮಾಡಿರುವುದನ್ನು ಹೋಗಿ
ನೋಡಿರಿ.

[13]‘‘ಇಸ್ರೇಲಿನ ಜನರಾದ ನೀವು ಈ ದುಷ್ಕೃತ್ಯಗಳನ್ನು
ಮಾಡುತ್ತಿದ್ದೀರಿ.’’ ಇದು ಯೆಹೋವನಾದ ನನ್ನ ಮಾತು:
‘‘ನಾನು ನಿಮಗೆ ಮತ್ತೆ ಮತ್ತೆ ಹೇಳಿದೆ, ಆದರೆ ನೀವು ನನ್ನ
ಮಾತನ್ನು ಕೇಳಲಿಲ್ಲ. ನಾನು ನಿಮ್ಮನ್ನು ಕೂಗಿದೆ, ಆದರೆ
ನೀವು ಉತ್ತರ ಕೊಡಲಿಲ್ಲ. [14]ಆದುದರಿಂದ ನನ್ನ
ಹೆಸರನ್ನು ಹೊಂದಿರುವ ಆಲಯವನ್ನೂ ನೀವು
ನಂಬಿರುವ ಆಲಯವನ್ನೂ ನಿಮ್ಮ ಪೂರ್ವಿಕರಿಗೆ ನಾನು
ಕೊಟ್ಟಿರುವ ಸ್ಥಳವನ್ನೂ ನಾನು ಶೀಲೋವಿಗೆ ಮಾಡಿದಂತೆ
ಮಾಡುವೆನು. [15]ನಾನು ನಿಮ್ಮ ಎಲ್ಲಾ ಸಹೋದರರನ್ನು
ಅಂದರೆ ಸಮಸ್ತ ಎಫ್ರಾಯೀಮ್ ವಂಶದವರನ್ನು ಎಸೆದು
ಬಿಟ್ಟ ಹಾಗೆ ನಿಮ್ಮನ್ನೂ ನನ್ನಿಂದ ದೂರ ಎಸೆದು
ಬಿಡುವೆನು.’’

[16]‘‘ಯೆರೆಮೀಯನೇ, ನೀನು ಈ ಯೆಹೂದದ ಜನರಿ
ಗಾಗಿ ಪ್ರಾರ್ಥಿಸಬೇಡ; ಇವರಿಗಾಗಿ ಮೊರೆಯಿಡಬೇಡ;
ಇವರಿಗಾಗಿ ಬೇಡಿಕೊಳ್ಳಬೇಡ; ಇವರಿಗಾಗಿ ನೀನು
ಮಾಡುವ ಪ್ರಾರ್ಥನೆಯನ್ನು ನಾನು ಕೇಳುವದಿಲ್ಲ. [17]ಆ
ಜನರು ಯೆಹೂದದ ಪಟ್ಟಣಗಳಲ್ಲಿಯೂ ಜೆರುಸಲೇ
ಮಿನ ಬೀದಿಗಳಲ್ಲಿಯೂ ಏನು ಮಾಡುತ್ತಿದ್ದಾರೆಂಬುದು
ನಿನಗೆ ಗೊತ್ತು.

[18]‘‘ಯೆಹೂದದ ಜನರು ಹೀಗೆ ಮಾಡುತ್ತಿದ್ದಾರೆ;
ಮಕ್ಕಳು ಸೌದೆಯನ್ನು ಆರಿಸುತ್ತಾರೆ. ತಂದೆಗಳು ಆ ಸೌದೆ
ಯಿಂದ ಬೆಂಕಿಯನ್ನು ಹೊತ್ತಿಸುತ್ತಾರೆ. ಹೆಂಗಸರು
ಹಿಟ್ಟನ್ನು ನಾದಿ ಸ್ವರ್ಗದ ಒಡತಿಗಾಗಿ ಹೋಳಿಗೆಗಳನ್ನು
ಮಾಡುತ್ತಾರೆ. ಈ ಯೆಹೂದದ ಜನರು ಅನ್ಯ ದೇವತೆ
ಗಳಿಗೆ ಪಾನನೈವೇದ್ಯವನ್ನು ಅರ್ಪಿಸುತ್ತಾರೆ. ಅವರು
ನನ್ನನ್ನು ರೇಗಿಸುವದಕ್ಕಾಗಿಯೇ ಹೀಗೆ ಮಾಡುತ್ತಾರೆ.
[19]ನಿಜವಾಗಿ ಹೇಳುವುದಾದರೆ, ಯೆಹೂದದ ಜನರು
ನನಗೆ ಕೇಡು ಮಾಡುತ್ತಿಲ್ಲ, ಅವರು ತಮಗೇ ಕೇಡು
ಮಾಡಿಕೊಳ್ಳುತ್ತಿದ್ದಾರೆ. ಅವರು ತಮಗೆ ನಾಚಿಕೆಯಾಗು
ವಂತೆ ಮಾಡುತ್ತಿದ್ದಾರೆ’’ ಎಂದು ಯೆಹೋವನು
ಹೇಳಿದನು.

[20]ಯೆಹೋವನು ಇಂತೆಂದನು: ‘‘ನಾನು ಈ ಸ್ಥಳಕ್ಕೆ
ವಿರೋಧವಾಗಿ ನನ್ನ ಕೋಪವನ್ನು ತೋರಿಸುವೆನು.
ನಾನು ಜನರನ್ನೂ ಪ್ರಾಣಿಗಳನ್ನೂ ದಂಡಿಸುವೆನು. ಕಾಡಿನ
ಮರಗಳನ್ನೂ ಹೊಲದ ಬೆಳೆಗಳನ್ನೂ ದಂಡಿಸುವೆನು. ನನ್ನ
ಕೋಪವು ಉರಿಯುವ ಬೆಂಕಿಯಂತಿರುವದು; ಅದನ್ನು
ತಡೆಯಲು ಯಾರಿಗೂ ಸಾಧ್ಯವಿಲ್ಲ.’’

## ಯೆಹೋವನು ಯಜ್ಞಗಳಿಗಿಂತ ಹೆಚ್ಚಾಗಿ ವಿಧೇಯತೆಯನ್ನು ಅಪೇಕ್ಷಿಸುವನು

[21]ಸರ್ವಶಕ್ತನೂ ಇಸ್ರೇಲಿನ ದೇವರೂ ಆಗಿರುವ
ಯೆಹೋವನು ಹೀಗೆ ಹೇಳುತ್ತಾನೆ: ‘‘ಹೋಗಿರಿ, ನಿಮ್ಮ
ಮನಸ್ಸಿಗೆ ಬಂದಷ್ಟು ಸರ್ವಾಂಗಹೋಮಗಳನ್ನು ಮತ್ತು
ಯಜ್ಞಗಳನ್ನು ಅರ್ಪಿಸಿರಿ. ಆ ಯಜ್ಞಗಳ ಮಾಂಸವನ್ನು
ನೀವೇ ತಿನ್ನಿರಿ. [22]ನಾನು ನಿಮ್ಮ ಪೂರ್ವಿಕರನ್ನು ಈಜಿಪ್ಟಿ
ನಿಂದ ಹೊರತಂದೆ. ನಾನು ಅವರೊಂದಿಗೆ ಮಾತನಾಡಿದೆ.
ಆದರೆ ನಾನು ಅವರಿಗೆ ಸರ್ವಾಂಗಹೋಮಗಳ ಬಗ್ಗೆ
ಯಾಗಲೀ ಯಜ್ಞಗಳ ಬಗ್ಗೆಯಾಗಲೀ ಯಾವ ಆಜ್ಞೆ
ಯನ್ನೂ ಕೊಟ್ಟಿಲ್ಲ. [23]ನಾನು ಅವರಿಗೆ ‘ನನಗೆ ವಿಧೇಯ
ರಾಗಿರಿ. ನಾನು ನಿಮಗೆ ದೇವರಾಗಿರುತ್ತೇನೆ, ನೀವು ನನ್ನ
ಭಕ್ತರಾಗಿರುತ್ತೀರಿ. ನಾನು ಆಜ್ಞಾಪಿಸಿದ್ದನ್ನೆಲ್ಲವನ್ನು
ಮಾಡಿರಿ, ಅದರಿಂದ ನಿಮಗೆ ಒಳ್ಳೆಯದಾಗುವುದು’
ಎಂದು ಮಾತ್ರ ಆಜ್ಞಾಪಿಸಿದ್ದೆ.

[24]‘‘ಆದರೆ ನಿಮ್ಮ ಪೂರ್ವಿಕರು ನನ್ನ ಮಾತನ್ನು ಕೇಳ
ಲಿಲ್ಲ. ಅವರು ನನ್ನ ಕಡೆಗೆ ಗಮನ ಕೊಡಲಿಲ್ಲ. ಅವರು
ಮೊಂಡರಾಗಿದ್ದು ತಮ್ಮ ಮನಸ್ಸಿಗೆ ಬಂದಂತೆ ನಡೆದು
ಕೊಂಡರು. ಅವರು ಒಳ್ಳೆಯವರಾಗಲಿಲ್ಲ. ಅವರು ಇನ್ನೂ
ಕೆಟ್ಟವರಾದರು. ಅವರು ಹಿಂದಕ್ಕೆ ಸರಿದರು ಮುಂದಕ್ಕೆ
ಬರಲಿಲ್ಲ. [25]ನಿಮ್ಮ ಪೂರ್ವಿಕರು ಈಜಿಪ್ಟನ್ನು ಬಿಟ್ಟ ದಿನ
ದಿಂದ ಇಂದಿನವರೆಗೂ ನಾನು ನಿಮ್ಮಲ್ಲಿಗೆ ನನ್ನ ಸೇವಕ
ರನ್ನು ಕಳುಹಿಸಿದ್ದೇನೆ. ನನ್ನ ಸೇವಕರು ಪ್ರವಾದಿ

---

**ಪವಿತ್ರ ಆಲಯ** ಜೆರುಸಲೇಮಿನಲ್ಲಿ ಯೆಹೋವನ ಆಲಯವಿದ್ದ ಕಾರಣ, ನಾವು ಎಷ್ಟೇ ದುಷ್ಕೃತ್ಯಗಳನ್ನು ಮಾಡಿದರೂ ಯೆಹೋವನು ಜೆರುಸಲೇಮನ್ನು ರಕ್ಷಿಸುತ್ತಾನೆಂದು ಹಲವರು ಭಾವಿಸಿದ್ದರು.

ಗಳಾಗಿದ್ದಾರೆ. ನಾನು ಅವರನ್ನು ಮತ್ತೆ ಮತ್ತೆ ನಿಮ್ಮಲ್ಲಿಗೆ
ಕಳುಹಿಸಿದೆ. [26]ಆದರೆ ನಿಮ್ಮ ಪೂರ್ವಿಕರು ನನ್ನ ಮಾತು
ಗಳನ್ನು ಕೇಳಲಿಲ್ಲ. ಅವರು ನನ್ನ ಕಡೆಗೆ ಗಮನ ಕೊಡ
ಲಿಲ್ಲ. ಅವರು ಅತಿಮೊಂಡರಾಗಿದ್ದು ಅವರ ತಂದೆಗಳಿ
ಗಿಂತ ಹೆಚ್ಚಿನ ದುಷ್ಕೃತ್ಯಗಳನ್ನು ಮಾಡಿದರು.

[27]‘‘ಯೆರೆಮೀಯನೇ, ನೀನು ಈ ಸಂಗತಿಗಳನ್ನು
ಯೆಹೂದದ ಜನರಿಗೆ ಹೇಳು. ಆದರೆ ಅವರು ನಿನ್ನ ಮಾತು
ಗಳನ್ನು ಕೇಳುವದಿಲ್ಲ. ನೀನು ಅವರನ್ನು ಕೂಗಿದರೂ,
ಅವರು ಉತ್ತರ ಕೊಡುವದಿಲ್ಲ. [28]ಆದುದರಿಂದ ನೀನು
ಅವರಿಗೆ ಹೀಗೆ ಹೇಳಬೇಕು: ತಮ್ಮ ದೇವರಾದ
ಯೆಹೋವನ ಆಜ್ಞೆಯನ್ನು ಪಾಲಿಸದ ಜನಾಂಗವಿದು. ಈ
ಜನರು ದೇವರ ಧರ್ಮೋಪದೇಶವನ್ನು ಕೇಳಲಿಲ್ಲ. ಈ
ಜನರಿಗೆ ನಿಜವಾದ ಧರ್ಮೋಪದೇಶ ಗೊತ್ತಿಲ್ಲ.

### ಸಂಹಾರದ ತಗ್ಗು

[29]‘‘ಯೆರೆಮೀಯನೇ, ನಿನ್ನ ಕೂದಲನ್ನು ಕತ್ತರಿಸಿ*
ಎಸೆದುಬಿಡು. ಬೋಳುಶಿಖರಕ್ಕೆ ಹೋಗಿ ರೋದಿಸು.
ಏಕೆಂದರೆ ಯೆಹೋವನು ಈ ತಲೆಮಾರಿನ ಜನರನ್ನು
ತಿರಸ್ಕರಿಸಿದ್ದಾನೆ; ಆತನು ಇವರಿಗೆ ವಿಮುಖನಾಗಿದ್ದಾನೆ.
ಆತನು ಕೋಪದಿಂದ ಅವರನ್ನು ದಂಡಿಸುವನು. [30]ನೀನು
ಹಾಗೆ ಮಾಡಲೇಬೇಕು ಯಾಕಂದರೆ, ಯೆಹೂದದ
ಜನರು ಮಾಡುವ ದುಷ್ಕೃತ್ಯಗಳನ್ನು ನಾನು ನೋಡಿ
ದ್ದೇನೆ.’’ ಯೆಹೋವನು ಇಂತೆನ್ನುತ್ತೇನೆ: ‘‘ಅವರು ತಮ್ಮ
ವಿಗ್ರಹಗಳನ್ನು ಸ್ಥಾಪಿಸಿದ್ದಾರೆ. ನಾನು ಆ ವಿಗ್ರಹಗಳನ್ನು
ದ್ವೇಷಿಸುತ್ತೇನೆ. ನನ್ನ ಹೆಸರಿನಿಂದ ಖ್ಯಾತಿಪಡೆದ ಆಲಯ
ದಲ್ಲಿ ಅವರು ವಿಗ್ರಹಗಳನ್ನು ಸ್ಥಾಪಿಸಿದ್ದಾರೆ. ಅವರು ನನ್ನ
ಆಲಯವನ್ನು ‘ಮಲಿನ’ ಗೊಳಿಸಿದ್ದಾರೆ. [31]ಯೆಹೂದದ
ಜನರು ಬೆನ್‌ಹಿನ್ನೋಮ್ ತಗ್ಗಿನಲ್ಲಿ ತೋಫೆತೆಂಬ
ಪೂಜಾಸ್ಥಳವನ್ನು ಕಟ್ಟಿದ್ದಾರೆ. ಆ ಸ್ಥಳಗಳಲ್ಲಿ ಜನರು ತಮ್ಮ
ಗಂಡು ಮತ್ತು ಹೆಣ್ಣು ಮಕ್ಕಳನ್ನು ಕೊಂದು ಯಜ್ಞದ
ಆಹುತಿಯೆಂದು ಅವರನ್ನು ಸುಡುತ್ತಾರೆ. ನೀವು ಹೀಗೆ
ಮಾಡಬೇಕೆಂದು ನಾನೆಂದೂ ಹೇಳಿಲ್ಲ. ಇಂಥ ವಿಚಾರ
ಗಳು ನನ್ನ ಮನಸ್ಸಿನಲ್ಲಿಯೂ ಬಂದಿಲ್ಲ. [32]ಹೀಗಿರಲು
ನಾನು ಈ ಕಣಿವೆಯನ್ನು ತೋಫೆತ್ ಮತ್ತು ಬೆನ್‌ಹಿ
ನ್ನೋಮಿನ ಕಣಿವೆ ಎಂದು ಕರೆಯದೆ ಇದನ್ನು ಸಂಹಾರದ
ಕಣಿವೆ ಎಂದು ಕರೆಯುವ ದಿನಗಳು ಬರುತ್ತಿವೆ ಎಂಬ
ಎಚ್ಚರಿಕೆಯನ್ನು ಕೊಡುತ್ತೇನೆ.’’ ಇದು ಯೆಹೋವನು
ಹೇಳಿದ ಮಾತು. ‘‘ಶವಗಳನ್ನು ಹೂಳುವದಕ್ಕೆ ಕೊಂಚವೂ
ಸ್ಥಳ ಇಲ್ಲದಂತಾಗುವವರೆಗೆ ತೋಫೆತಿನಲ್ಲಿ ಶವಗಳನ್ನು
ಹೂಳುವ ಕಾರಣ ಅದಕ್ಕೆ ಈ ಹೆಸರನ್ನು ಕೊಡಲಾ
ಗುವುದು. [33]ಆಗ ಸತ್ತವರ ದೇಹಗಳು ಭೂಮಿಯ ಮೇಲೆ
ಬಿದ್ದಿರುತ್ತವೆ; ಅವು ಆಕಾಶದಲ್ಲಿ ಹಾರಾಡುವ ಪಕ್ಷಿಗಳಿಗೂ
ಕಾಡುಪ್ರಾಣಿಗಳಿಗೂ ಆಹಾರವಾಗುತ್ತವೆ. ಆ ಪಕ್ಷಿಗಳನ್ನು
ಮತ್ತು ಪ್ರಾಣಿಗಳನ್ನು ಓಡಿಸುವದಕ್ಕೆ ಒಬ್ಬನಾದರೂ
ಜೀವಂತವಾಗಿರುವುದಿಲ್ಲ.

[34]‘‘ಜೆರುಸಲೇಮಿನ ಬೀದಿಗಳಲ್ಲಿಯೂ ಯೆಹೂದದ
ಪಟ್ಟಣಗಳಲ್ಲಿಯೂ ಸಂತೋಷ ಮತ್ತು ಸಂಭ್ರಮದ
ಧ್ವನಿಯನ್ನೂ ವಧುವರರ ಸ್ವರವನ್ನೂ ಬರದಂತೆ
ಮಾಡುತ್ತೇನೆ. ಈ ಪ್ರದೇಶವು ಬರಿದಾದ ಮರಳು
ಗಾಡಾಗುವದು.’’

8 ಯೆಹೋವನು ಇಂತೆನ್ನುತ್ತಾನೆ: ‘‘ಆಗ ಜನರು
ಯೆಹೂದದ ರಾಜರ ಮತ್ತು ಪ್ರಮುಖ ಅಧಿಪತಿಗಳ
ಎಲುಬುಗಳನ್ನು ಅವರ ಗೋರಿಗಳಿಂದ ಹೊರತೆಗೆಯು
ವರು. ಅವರು ಯಾಜಕರ ಮತ್ತು ಪ್ರವಾದಿಗಳ ಎಲುಬು
ಗಳನ್ನು ಅವರ ಗೋರಿಗಳಿಂದ ಹೊರತೆಗೆಯುವರು.
ಅವರು ಜೆರುಸಲೇಮಿನ ಎಲ್ಲಾ ಜನರ ಎಲುಬುಗಳನ್ನು
ಅವರ ಗೋರಿಗಳಿಂದ ಹೊರತೆಗೆಯುವರು. [2]ಜೆರುಸಲೇ
ಮಿನ ಜನರು ಸೂರ್ಯನನ್ನು, ಚಂದ್ರನನ್ನು, ನಕ್ಷತ್ರ ಗಣ
ಗಳನ್ನು ಪ್ರೀತಿಸಿ, ಅನುಸರಿಸಿ, ವಿಚಾರಿಸಿ, ಪೂಜಿಸಿದ್ದರಿಂದ
ಅವರ ಎಲುಬುಗಳನ್ನು ಅವುಗಳ ಕೆಳಗೆ ಭೂಮಿಯ
ಮೇಲೆ ಹರಡುವರು. ಯಾರೊಬ್ಬರೂ ಆ ಎಲುಬುಗ
ಳನ್ನು ಪುನಃ ಒಂದೆಡೆ ಸೇರಿಸಿ ಹೂಳುವುದಿಲ್ಲ. ಆ
ಎಲುಬುಗಳು ಭೂಮಿಯ ಮೇಲೆ ಎಸೆದ ಸಗಣಿ
ಯಂತಾಗುವವು.

[3]‘‘ಯೆಹೂದದ ಜನರು ತಮ್ಮ ಮನೆಗಳನ್ನು ಮತ್ತು
ಪ್ರದೇಶವನ್ನು ಬಿಡುವಂತೆ ಮಾಡುತ್ತೇನೆ. ಆ ಜನರನ್ನು
ಪರದೇಶಕ್ಕೆ ಒಯ್ಯಲಾಗುವುದು. ಯುದ್ಧದಲ್ಲಿ ಮರಣ
ಹೊಂದದೆ ಅಳಿದುಳಿದ ಕೆಲವು ಮಂದಿ ಯೆಹೂದಿಯರು
ತಾವು ಸತ್ತುಹೋಗಿದ್ದರೆ ಚೆನ್ನಾಗಿತ್ತು ಎಂದುಕೊಳ್ಳು
ವರು’’ ಇದು ಯೆಹೋವನ ನುಡಿ.

### ಪಾಪ ಮತ್ತು ಶಿಕ್ಷೆ

[4]ಯೆರೆಮೀಯನೇ, ಯೆಹೂದದ ಜನರಿಗೆ ಹೀಗೆ
ಹೇಳು:

ಯೆಹೋವನು ಈ ಮಾತನ್ನು ಹೇಳುತ್ತಾನೆ. ‘‘ಒಬ್ಬ
ಮನುಷ್ಯನು ಕೆಳಗೆ ಬಿದ್ದರೆ ಪುನಃ ಅವನು ಮೇಲಕ್ಕೆ
ಏಳುತ್ತಾನೆ; ಒಬ್ಬ ಮನುಷ್ಯನು ತಪ್ಪುದಾರಿ ಹಿಡಿದರೆ
ಅವನು ಹಿಂತಿರುಗಿ ಬರುತ್ತಾನೆಂಬುದು ನಿಮಗೆ
ಗೊತ್ತು.

---

**ಕತ್ತರಿಸಿ** ಪ್ರವಾದಿಯು ಇಲ್ಲಿ ಒಂದು ಜನಾಂಗದೊಡನೆ ಮಾತಾಡುತ್ತಿದ್ದಾನೆ. ಆಕೆಯ (ಜನಾಂಗದ) ಭಯಂಕರವಾದ ಸ್ಥಿತಿಯ ಕುರಿತು ಗೋಳಾಡುವಂತೆ ಆಕೆಗೆ ಹೇಳುತ್ತಿದ್ದಾನೆ.

5 ಯೆಹೂದದ ಜನರು ತಪ್ಪುದಾರಿಯನ್ನು ಹಿಡಿದಿ
ದ್ದಾರೆ. ಆದರೆ ಜೆರುಸಲೇಮಿನ ಜನರು ಆ ತಪ್ಪು
ದಾರಿಯ ಮೇಲೆ ನಡೆಯುವದನ್ನು ಏಕೆ ಮುಂದು
ವರಿಸಿದ್ದಾರೆ? ತಮ್ಮ ಸುಳ್ಳುಗಳನ್ನೇ ಅವರು ನಂಬಿ
ದ್ದಾರೆ, ಅವರು ಹಿಂತಿರುಗಿ ಬರಲು ಸಿದ್ಧರಿಲ್ಲ.
6 ನಾನು ಎಚ್ಚರವಹಿಸಿ ಅವರು ಹೇಳುವದನ್ನು ಕೇಳಿ
ದ್ದೇನೆ. ಆದರೆ ಅವರು ಸರಿಯಾದುದನ್ನು ಹೇಳುವ
ದಿಲ್ಲ. ತಾವು ಮಾಡಿದ ಪಾಪಕ್ಕಾಗಿ ಅವರು ಪಶ್ಚಾ
ತ್ತಾಪ ಪಡುವದಿಲ್ಲ. ಅವರು ಮಾಡಿದ ದುಷ್ಕೃತ್ಯದ
ಬಗ್ಗೆ ಅವರು ಯೋಚಿಸುವದಿಲ್ಲ. ಜನರು ವಿಚಾರ
ಮಾಡದೆ ಕೆಲಸಮಾಡುತ್ತಾರೆ. ಅವರು ಯುದ್ಧ
ದಲ್ಲಿ ಓಡುವ ಕುದುರೆಯಂತಿದ್ದಾರೆ.
7 ಆಕಾಶದಲ್ಲಿ ಹಾರಾಡುವ ಪಕ್ಷಿಗಳಿಗೂ ಸಹ ಆಯಾ
ಕೆಲಸ ಮಾಡುವ ಸರಿಯಾದ ಸಮಯ ಗೊತ್ತಿದೆ.
ಬಕವೂ ಬೆಳವಕ್ಕಿಯೂ ಬಾನಕ್ಕಿಯೂ
ಕೊಕ್ಕರೆಯೂ ಹೊಸ ಮನೆಗೆ ಹೋಗಬೇಕಾದ
ಕಾಲವನ್ನು ಬಲ್ಲವು. ಆದರೆ ನನ್ನ ಜನರಿಗೆ ತಮ್ಮ
ಯೆಹೋವನು ಅವರಿಂದ ಏನನ್ನು ಬಯಸುತ್ತಾನೆ
ಎಂಬುದು ಗೊತ್ತಿಲ್ಲ.
8 “‘ಯೆಹೋವನ ಧರ್ಮಶಾಸ್ತ್ರವು ನಮ್ಮಲ್ಲಿ ಇದೆ.
ಆದುದರಿಂದ ನಾವು ಜ್ಞಾನಿಗಳು’’ ಎಂದು ನೀವು
ಹೇಳುವಿರಿ. ಆದರೆ ಅದು ನಿಜವಲ್ಲ. ಏಕೆಂದರೆ
ಲಿಪಿಗಾರರು* ತಮ್ಮ ಲೇಖನಿಯಿಂದ ಸುಳ್ಳು
ಬರೆದಿದ್ದಾರೆ.
9 ಆ ‘ಜ್ಞಾನಿಗಳು’ ಯೆಹೋವನ ಉಪದೇಶವನ್ನು
ಕೇಳಲು ಒಪ್ಪಲಿಲ್ಲ. ಆದುದರಿಂದ ಅವರು ನಿಜ
ವಾದ ಜ್ಞಾನಿಗಳಲ್ಲವೇ ಅಲ್ಲ. ಆ ‘ಜ್ಞಾನಿಗಳು’
ಸಿಕ್ಕಿಹಾಕಿಕೊಂಡಿದ್ದಾರೆ. ಅವರು ಗಾಬರಿ ಪಟ್ಟಿ
ದ್ದಾರೆ ಮತ್ತು ನಾಚಿಕೆಪಟ್ಟಿದ್ದಾರೆ.
10 ಆದುದರಿಂದ ನಾನು ಅವರ ಹೆಂಡಂದಿರನ್ನು ಬೇರೆ
ಯವರಿಗೆ ಕೊಡುತ್ತೇನೆ. ನಾನು ಅವರ ಹೊಲ
ಗಳನ್ನು ಬೇರೆಯವರಿಗೆ ಕೊಡುತ್ತೇನೆ. ಇಸ್ರೇಲಿನ
ಎಲ್ಲಾ ಜನರಿಗೆ ಹೆಚ್ಚಾಗಿ ಹಣಬೇಕು. ಸಾಮಾನ್ಯ
ರನ್ನು ಮೊದಲುಗೊಂಡು ಅತ್ಯಂತ ಮುಖ್ಯರಾದವ
ರೆಲ್ಲರೂ ಹೀಗೇ ಇದ್ದಾರೆ. ಪ್ರವಾದಿಗಳಿಂದ
ಹಿಡಿದು ಯಾಜಕರವರೆಗೆ ಎಲ್ಲರೂ ಸುಳ್ಳು
ಹೇಳುತ್ತಾರೆ.
11 ಪ್ರವಾದಿಗಳು ಮತ್ತು ಯಾಜಕರು ನಮ್ಮ ಜನರ
ಆಳವಾದ ಗಾಯಗಳನ್ನು ಕೇವಲ ಅಲ್ಪಗಾಯಗ
ಳಂತೆ ಪರಿಗಣಿಸಿ ಚಿಕಿತ್ಸೆ ಕೊಡುತ್ತಿದ್ದಾರೆ. ‘ಎಲ್ಲಾ
ಚೆನ್ನಾಗಿದೆ, ಎಲ್ಲಾ ಚೆನ್ನಾಗಿದೆ’ಎಂದು ಅವರು
ಹೇಳುತ್ತಾರೆ. ಆದರೆ ಎಲ್ಲಾ ಚೆನ್ನಾಗಿಲ್ಲ.
12 ಅವರು ತಮ್ಮ ದುಷ್ಕೃತ್ಯಗಳಿಗಾಗಿ ನಾಚಿಕೆಪಡ
ಬೇಕು. ಆದರೆ ಅವರು ಸ್ವಲ್ಪವೂ ನಾಚಿಕೆಪಡುವು
ದಿಲ್ಲ. ಅವರಿಗೆ ನಾಚಿಕೆ ಎಂಬುದೇ ತಿಳಿದಿಲ್ಲ.
ಆದುದರಿಂದ ಉಳಿದೆಲ್ಲರಂತೆ ಅವರಿಗೂ ಶಿಕ್ಷೆ
ವಿಧಿಸಲಾಗುವುದು. ನಾನು ಅವರನ್ನು ಶಿಕ್ಷಿಸುವಾಗ
ಅವರು ಮುಗ್ಗರಿಸಿ ಬೀಳುವರು’’ ಯೆಹೋವನ
ನುಡಿಗಳಿವು.
13 “ನಾನು ಅವರ ಹಣ್ಣುಗಳನ್ನೂ ಬೆಳೆಗಳನ್ನೂ ಕಿತ್ತು
ಕೊಂಡು ಅವರಿಗೆ ಸುಗ್ಗಿಯಾಗದಂತೆ ಮಾಡು
ತ್ತೇನೆ.’’ ಇದು ಯೆಹೋವನ ನುಡಿ. “ದ್ರಾಕ್ಷಿಬಳ್ಳಿ
ಯಲ್ಲಿ ದ್ರಾಕ್ಷಿಗಳಿರುವದಿಲ್ಲ. ಅಂಜೂರದ
ಮರದಲ್ಲಿ ಒಂದಾದರೂ ಅಂಜೂರದ ಹಣ್ಣು
ಇರುವದಿಲ್ಲ. ಎಲೆಗಳು ಸಹ ಒಣಗಿ ಉದುರು
ವವು. ನಾನು ಅವರಿಗೆ ಕೊಟ್ಟ ವಸ್ತುಗಳನ್ನು
ಕಿತ್ತುಕೊಳ್ಳುವೆನು.
14 “ನಾವು ಇಲ್ಲಿ ಸುಮ್ಮನೆ ಕುಳಿತುಕೊಂಡಿರುವುದೇಕೆ?
ಬನ್ನಿ, ನಾವು ಭದ್ರವಾದ ಪಟ್ಟಣಗಳಿಗೆ ಓಡಿ
ಹೋಗೋಣ. ನಮ್ಮ ದೇವರಾದ ಯೆಹೋವನು
ನಮ್ಮನ್ನು ಸಾಯುವಂತೆ ಮಾಡಿದರೆ ಅಲ್ಲಿಯೇ
ಸತ್ತುಹೋಗೋಣ. ನಾವು ಯೆಹೋವನಿಗೆ
ವಿರುದ್ಧವಾಗಿ ಪಾಪಮಾಡಿದ್ದೇವೆ. ಆದುದರಿಂದ
ಆತನು ನಮಗೆ ಕುಡಿಯಲು ವಿಷಮಿಶ್ರಿತ ನೀರನ್ನು
ಕೊಟ್ಟಿದ್ದಾನೆ.
15 ನಾವು ಶಾಂತಿಯನ್ನು ನಿರೀಕ್ಷಿಸಿದ್ದೆವು. ಆದರೆ
ಒಳ್ಳೆಯದೇನೂ ಆಗಲಿಲ್ಲ. ಅವನು ನಮ್ಮನ್ನು
ಕ್ಷಮಿಸುವ ಸಮಯಕ್ಕಾಗಿ ಕಾದುಕೊಂಡಿದ್ದೆವು,
ಆದರೆ ಕೇವಲ ವಿನಾಶ ಮಾತ್ರ ಬಂದಿತು.
16 ದಾನ್ ಕುಲದವರ ಪ್ರದೇಶದಿಂದ ನಾವು ಶತ್ರು
ಗಳ ಕುದುರೆಗಳ ಕೆನೆತವನ್ನು ಕೇಳುತ್ತಿದ್ದೇವೆ.
ಅವುಗಳ ಪಾದಗಳ ಬಡಿತದಿಂದ ಭೂಮಿ ನಡುಗು
ತ್ತಿದೆ. ಅವರು ನಮ್ಮ ಪ್ರದೇಶವನ್ನು ಮತ್ತು ಅಲ್ಲಿದ್ದ
ಎಲ್ಲವನ್ನು ಹಾಳು ಮಾಡಲು ಬಂದಿದ್ದಾರೆ. ಅವರು
ನಗರವನ್ನು ಮತ್ತು ಅಲ್ಲಿದ್ದ ಎಲ್ಲಾ ಜನರನ್ನು
ಹಾಳುಮಾಡಲು ಬಂದಿದ್ದಾರೆ.

17 “ಯೆಹೂದದ ಜನರೇ, ನಿಮ್ಮನ್ನು ಕಚ್ಚುವದಕ್ಕಾಗಿ
ವಿಷಪೂರಿತ ಹಾವುಗಳನ್ನು ಕಳಿಸುತ್ತಿದ್ದೇನೆ. ಆ
ಹಾವುಗಳನ್ನು ತಡೆಯಲಾಗದು. ಅವುಗಳು
ನಿಮ್ಮನ್ನು ಕಚ್ಚುವವು’’ ಇದು ಯೆಹೋವನ ನುಡಿ.

---

**ಲಿಪಿಗಾರರು** ಆ ಕಾಲದ ಲಿಪಿಗಾರರು ವಿವಿಧ ಬರಹಗಳನ್ನು ನಕಲು ಮಾಡುತ್ತಿದ್ದರು. ಅನಂತರ ಹಳೆ ಒಡಂಬಡಿಕೆ ಎಂದು ಕರೆಯಲ್ಪಟ್ಟ ಪುಸ್ತಕಗಳನ್ನು ಸಹ ಅವರು ನಕಲು ಮಾಡುತ್ತಿದ್ದರು.

18 ದೇವರೇ, ನಾನು ದುಃಖಿತನಾಗಿದ್ದೇನೆ, ಭಯ
ಭೀತನಾಗಿದ್ದೇನೆ.
19 ನನ್ನ ಜನರ ಮೊರೆಯನ್ನು ಆಲಿಸು. ದೇಶದ ಎಲ್ಲೆಡೆ
ಯಲ್ಲಿಯೂ ಅವರು ಸಹಾಯಕ್ಕಾಗಿ ಕೂಗುತ್ತಿ
ದ್ದಾರೆ. ''ಈಗಲೂ ಯೆಹೋವನು ಚೀಯೋನಿ
ನಲ್ಲಿದ್ದಾನೆಯೇ? ಚೀಯೋನಿನ ರಾಜನು
ಈಗಲೂ ಅಲ್ಲಿದ್ದಾನೆಯೇ?'' ಎಂದು ಅವರು
ಕೇಳುತ್ತಾರೆ. ದೇವರು ಇಂತೆನ್ನುತ್ತಾನೆ: ''ಯೆಹೂ
ದದ ಜನರು ತಮ್ಮ ವಿಗ್ರಹಗಳನ್ನು ಪೂಜಿಸಿ ನನ್ನ
ಕೋಪವನ್ನು ಏಕೆ ಕೆರಳಿಸುತ್ತಾರೆ? ಅವರು
ನಿಷ್ಪ್ರಯೋಜಕವಾದ ಅನ್ಯದೇವರ ವಿಗ್ರಹಗಳನ್ನು
ಪೂಜಿಸಿದರು.''

20 ''ಸುಗ್ಗಿಯಕಾಲ ಮುಗಿಯಿತು, ಬೇಸಿಗೆ ಕಾಲ
ಹೋಯಿತು, ಆದರೆ ನಮಗಿನ್ನೂ ರಕ್ಷಣೆ ಆಗ
ಲಿಲ್ಲ'' ಎಂದು ಜನರು ಅನ್ನುತ್ತಾರೆ.
21 ನನ್ನ ಜನರು ಗಾಯಗೊಂಡಿದ್ದಾರೆ. ಆದುದರಿಂದ
ನಾನೂ ಗಾಯಗೊಂಡಿದ್ದೇನೆ. ಈಗ ಗಾಯ
ಗೊಂಡ ಜನರ ಬಗ್ಗೆ ಯೋಚಿಸುತ್ತ ನಾನು
ದುಃಖದಿಂದ ಮೌನವಾಗಿದ್ದೇನೆ.
22 ಗಿಲ್ಯಾದಿನಲ್ಲಿ ಖಂಡಿತವಾಗಿಯೂ ಔಷಧವಿದೆ.
ಖಂಡಿತವಾಗಿಯೂ ಅಲ್ಲಿ ಒಬ್ಬ ವೈದ್ಯನಿದ್ದಾನೆ.
ಆದರೆ ನನ್ನ ಜನರ ಗಾಯಗಳು ಗುಣವಾಗಲಿಲ್ಲ
ವೇಕೆ?

9 ನನ್ನ ತಲೆಯಲ್ಲೆಲ್ಲ ನೀರು ತುಂಬಿಕೊಂಡಿದ್ದು, ನನ್ನ
ಕಣ್ಣುಗಳು ನೀರಿನ ಬುಗ್ಗೆಗಳಾಗಿದ್ದರೆ, ನಾಶ
ಮಾಡಲ್ಪಟ್ಟ ನನ್ನ ಜನರಿಗಾಗಿ ಹಗಲಿರುಳು
ಗೋಳಾಡುತ್ತಿದ್ದೆ.
2 ಮರಳುಗಾಡಿನಲ್ಲಿ ನನಗೊಂದು ಸ್ಥಳವಿದ್ದರೆ,
ಪ್ರಯಾಣಿಕರು ರಾತ್ರಿ ಕಳೆಯುವ ಮನೆ ಇದ್ದಿದ್ದರೆ,
ನಾನು ನನ್ನ ಜನರನ್ನು ಬಿಡಬಹುದಾಗಿತ್ತು. ನಾನು
ಆ ಜನರಿಂದ ದೂರ ಹೋಗಬಹುದಾಗಿತ್ತು.
ಏಕೆಂದರೆ ಅವರೆಲ್ಲರೂ ದೇವರಿಗೆ ದ್ರೋಹ
ಮಾಡುತ್ತಿದ್ದಾರೆ, ಅವರೆಲ್ಲರೂ ಆತನಿಗೆ ವಿರೋಧ
ವಾಗಿ ಮಾಡುತ್ತಿದ್ದಾರೆ.
3 ''ಅವರು ತಮ್ಮ ನಾಲಿಗೆಗಳನ್ನು ಬಿಲ್ಲಿನಂತೆ ಉಪ
ಯೋಗಿಸುತ್ತಿದ್ದಾರೆ. ಅವರ ಬಾಯಿಂದ ಬಾಣಗ
ಳಂತೆ ಸುಳ್ಳುಗಳು ಬರುತ್ತಿವೆ. ಈ ನಾಡಿನಲ್ಲಿ ಸತ್ಯ
ವಲ್ಲ 'ಅಸತ್ಯ' ಪ್ರಬಲವಾಗುತ್ತಿದೆ. ಅವರು ಒಂದು
ಪಾಪದಿಂದ ಮತ್ತೊಂದು ಪಾಪಕ್ಕೆ ಹೋಗುತ್ತಿ
ದ್ದಾರೆ. ಅವರು ನನ್ನನ್ನು ಅರಿತಿಲ್ಲ.'' ದೇವರು ಈ
ಮಾತನ್ನು ಹೇಳಿದನು.
4 ''ನಿಮ್ಮ ನೆರೆಮನೆಯವರ ಬಗ್ಗೆ ಎಚ್ಚರವಹಿಸಿರಿ;
ನಿಮ್ಮ ಸ್ವಂತ ಸೋದರರನನ್ನೂ ನಂಬಬೇಡಿ.
ಏಕೆಂದರೆ ಪ್ರತಿಯೊಬ್ಬ ಸಹೋದರನೂ ಮೋಸ
ಗಾರನಾಗಿದ್ದಾನೆ. ಪ್ರತಿಯೊಬ್ಬ ನೆರೆಯವನೂ
ನಿಮ್ಮ ಮರೆಯಲ್ಲಿ ನಿಮ್ಮನ್ನು ನಿಂದಿಸುತ್ತಾನೆ.
5 ಪ್ರತಿಯೊಬ್ಬ ವ್ಯಕ್ತಿಯು ತನ್ನ ನೆರೆಯವನಿಗೆ ಸುಳ್ಳು
ಹೇಳುತ್ತಾನೆ. ಯಾರೊಬ್ಬನೂ ಸತ್ಯವನ್ನು ನುಡಿ
ಯುವದಿಲ್ಲ. ಯೆಹೂದದ ಜನರು ತಮ್ಮ ನಾಲಿಗೆ
ಗಳಿಗೆ ಸುಳ್ಳು ಹೇಳುವದನ್ನು ಕಲಿಸಿದ್ದಾರೆ. ಅವರು
ಹಿಂತಿರುಗಿ ಬರಲು ಆಯಾಸವಾಗುವಷ್ಟು ಪಾಪ
ಗಳನ್ನು ಮಾಡಿದ್ದಾರೆ.
6 ಒಂದು ದುಷ್ಕೃತ್ಯ ಮತ್ತೊಂದು ದುಷ್ಕೃತ್ಯವನ್ನು
ಹಿಂಬಾಲಿಸಿ ಬಂದಿತು. ಒಂದು ಸುಳ್ಳು ಇನ್ನೊಂದು
ಸುಳ್ಳನ್ನು ಹಿಂಬಾಲಿಸಿತು. ಜನರು ನನ್ನನ್ನು ಅರಿತು
ಕೊಳ್ಳಲಿಲ್ಲ.'' ದೇವರು ಆ ಮಾತುಗಳನ್ನು
ಹೇಳಿದನು.

7 ''ಸರ್ವಶಕ್ತನಾದ ಯೆಹೋವನು ಇಂತೆನ್ನುವನು:
''ಜನರು ಲೋಹವನ್ನು ಪುಟಕ್ಕಿಟ್ಟು ಪರೀಕ್ಷಿಸು
ವಂತೆ ನಾನು ಯೆಹೂದದ ಜನರನ್ನು ಪರೀಕ್ಷಿಸು
ತ್ತೇನೆ. ನನಗೆ ಬೇರೆ ಮಾರ್ಗವೇ ಇಲ್ಲ. ನನ್ನ ಜನರು
ಪಾಪವನ್ನು ಮಾಡಿದ್ದಾರೆ.
8 ಯೆಹೂದದ ಜನರ ನಾಲಿಗೆಗಳು ಚೂಪಾದ
ಬಾಣಗಳಂತಿವೆ; ಅವರ ಬಾಯಿಗಳು ಸುಳ್ಳಾಡು
ತ್ತವೆ. ಪ್ರತಿಯೊಬ್ಬನು ತನ್ನ ನೆರೆಮನೆಯವ
ನೊಂದಿಗೆ ನಯವಾಗಿ ಮಾತನಾಡುತ್ತಾನೆ. ರಹಸ್ಯ
ವಾಗಿ ತನ್ನ ನೆರೆಮನೆಯವನನ್ನು ಆಕ್ರಮಣ
ಮಾಡಲು ಯುಕ್ತಿ ಮಾಡುತ್ತಿರುತ್ತಾನೆ.
9 ಹೀಗಿರಲು ನಾನು ಯೆಹೂದದ ಜನರನ್ನು ಶಿಕ್ಷಿಸ
ಬಾರದೇ ?'' ಇದು ದೇವರಿಂದ ಬಂದ ಮಾತು.
''ಅಂಥಾ ಜನರನ್ನು ನಾನು ಶಿಕ್ಷಿಸಬೇಕೆಂಬುದು
ನಿನಗೆ ಗೊತ್ತು. ಅವರಿಗೆ ತಕ್ಕ ಶಿಕ್ಷೆಯನ್ನು ನಾನು
ಕೊಡಬೇಕು.''
10 ನಾನು ಪರ್ವತಗಳಿಗಾಗಿ ಗಟ್ಟಿಯಾಗಿ ಅಳುವೆನು;
ಬರಿದಾದ ಹೊಲಗಳಿಗಾಗಿ ಶೋಕಗೀತೆಯನ್ನು
ಹಾಡುವೆನು. ಏಕೆಂದರೆ ಅಲ್ಲಿ ಸಜೀವ ವಸ್ತುಗಳಿಲ್ಲ.
ಯಾರೂ ಅಲ್ಲಿ ತಿರುಗಾಡುವದಿಲ್ಲ. ಆ ಸ್ಥಳಗಳಲ್ಲಿ
ದನಗಳ ಸದ್ದು ಕೇಳಿಸುವದಿಲ್ಲ; ಪಕ್ಷಿಗಳು ಹಾರಿ
ಹೋಗಿವೆ; ಪ್ರಾಣಿಗಳು ಓಡಿಹೋಗಿವೆ.

11 ''ನಾನು (ಯೆಹೋವನು) ಜೆರುಸಲೇಮ್ ನಗರ
ವನ್ನು ಕಸದ ರಾಶಿಯನ್ನಾಗಿ ಮಾಡುವೆನು. ಅದು

ನರಿಗಳ* ನಿವಾಸವಾಗುವದು. ನಾನು ಯೆಹೂದ ಪ್ರಾಂತದ ನಗರಗಳನ್ನು ನಾಶಮಾಡುವೆನು. ಅಲ್ಲಿ ಒಬ್ಬರೂ ವಾಸಮಾಡಲಾರರು.''

12 ಈ ಭೂಮಿಯನ್ನು ಏಕೆ ಹಾಳು ಮಾಡಲಾಯಿತು? ಇದನ್ನು ಯಾರೂ ಹೋಗದ ಬರಿದಾದ ಮರಳು ಗಾಡನ್ನಾಗಿ ಏಕೆ ಮಾಡಲಾಯಿತು? ಇದನ್ನರಿತ ಜ್ಞಾನಿಯೊಬ್ಬನಿದ್ದಾನೆಯೇ? ಯೆಹೋವನಿಂದ ತಿಳಿದುಕೊಂಡ ಜ್ಞಾನಿಯೊಬ್ಬನಿದ್ದಾನೆಯೇ? ಯೆಹೋವನ ಸಂದೇಶವನ್ನು ವಿವರಿಸ ಬಲ್ಲವ ನೊಬ್ಬನಿದ್ದಾನೆಯೇ?

13 ಯೆಹೋವನು ಈ ಪ್ರಶ್ನೆಗಳಿಗೆ ಉತ್ತರಕೊಟ್ಟನು. ಆತನು, ''ಏಕೆಂದರೆ ಯೆಹೂದದ ಜನರು ನನ್ನ ಉಪದೇಶವನ್ನು ಅನುಸರಿಸಲಿಲ್ಲ. ನಾನು ಅವರಿಗೆ ಧರ್ಮೋಪದೇಶವನ್ನು ಕೊಟ್ಟರೂ ಅವರು ನನ್ನ ಮಾತನ್ನು ಕೇಳಲು ಒಪ್ಪಲಿಲ್ಲ. ಅವರು ನನ್ನ ಧರ್ಮೋಪದೇಶಗಳನ್ನು ಅನುಸರಿಸಲಿಲ್ಲ.

14 ಯೆಹೂದದ ಜನರು ತಮ್ಮದೇ ಆದ ರೀತಿಯಲ್ಲಿ ಜೀವಿಸಿದರು. ಅವರು ಹಟಮಾರಿಗಳಾಗಿದ್ದರು. ಅವರು ಸುಳ್ಳುದೇವರಾದ ಬಾಳನನ್ನು ಅನುಸರಿಸಿ ದರು. ಅವರ ಪೂರ್ವಿಕರು ಸುಳ್ಳು ದೇವರುಗಳ ಸೇವೆ ಮಾಡುವದನ್ನು ಅವರಿಗೆ ಕಲಿಸಿದರು.''

15 ಇಸ್ರೇಲಿನ ದೇವರಾದ ಸರ್ವಶಕ್ತನಾದ ಯೆಹೋ ವನ ಸಂದೇಶವಿದು: ''ನಾನು ಬೇಗನೆ ಯೆಹೂ ದದ ಜನರಿಗೆ ಕಹಿಯಾದ ಆಹಾರವನ್ನು ತಿನ್ನುವಂತೆ ಮಾಡುವೆನು. ನಾನು ಅವರಿಗೆ ವಿಷಮಿಶ್ರಿತ ನೀರನ್ನು ಕುಡಿಯುವಂತೆ ಮಾಡುವೆನು.

16 ನಾನು ಯೆಹೂದದ ಜನರನ್ನು ಬೇರೆ ಜನಾಂಗಗ ಳಲ್ಲಿ ಚದುರಿಸಿಬಿಡುತ್ತೇನೆ. ಅವರು ಮತ್ತು ಅವರ ತಂದೆಗಳು ಎಂದೂ ಅರಿಯದ ಅಪರಿಚಿತ ದೇಶಗ ಳಲ್ಲಿ ಅವರು ವಾಸಿಸುವರು. ನಾನು ಖಡ್ಗಧಾರಿಗ ಳಾದ ಜನರನ್ನು ಕಳುಹಿಸುತ್ತೇನೆ. ಅವರು ಯೆಹೂದದ ಜನರನ್ನು ನಿರ್ಮೂಲವಾಗುವ ವರೆಗೆ ಕೊಲ್ಲುವರು.''

17 ಸರ್ವಶಕ್ತನಾದ ಯೆಹೋವನು ಹೀಗೆ ಹೇಳು ತ್ತಾನೆ: ''ಈಗ ಈ ವಿಷಯಗಳ ಬಗ್ಗೆ ವಿಚಾರ ಮಾಡಿರಿ, ಶವಸಂಸ್ಕಾರದ ಸಮಯದಲ್ಲಿ ಕೂಲಿ ಪಡೆದು ಅಳುವ ಹೆಂಗಸರನ್ನು ಕರೆಯಿಸಿರಿ.

18 ಆ ಹೆಂಗಸರು, 'ಬೇಗನೆ ಬಂದು ನಮಗಾಗಿ ಗೋಳಾಡಲಿ. ಆಗ ನಮ್ಮ ಕಣ್ಣುಗಳು ಕಣ್ಣೀರಿ ನಿಂದ ತುಂಬುವವು; ನಮ್ಮ ಕಣ್ಣುಗಳಿಂದ ನೀರಿನ ಪ್ರವಾಹಗಳು ಹರಿಯುವವು' ಎನ್ನುವರು.

19 ''ಚೀಯೋನಿನಿಂದ ಮಹಾ ಗೋಳಾಟವು ಕೇಳಿಸು ತ್ತಿದೆ. 'ನಿಜವಾಗಿಯೂ ನಾವು ಹಾಳಾಗಿಹೋದೆವು. ನಿಜವಾಗಿಯೂ ನಾವು ನಾಚಿಕೆಪಡುವಂತಾಗಿದೆ. ನಾವು ನಮ್ಮ ನಾಡನ್ನು ಬಿಡಬೇಕು, ಏಕೆಂದರೆ ನಮ್ಮ ಮನೆಗಳನ್ನು ನಾಶಪಡಿಸಲಾಗಿದೆ.'''

20 ಯೆಹೂದದ ಸ್ತ್ರೀಯರೇ, ಯೆಹೋವನ ಸಂದೇಶ ವನ್ನು ಕೇಳಿರಿ. ಯೆಹೋವನ ಬಾಯಿಂದ ಬರುವ ಮಾತುಗಳನ್ನು ಕೇಳಲು ನಿಮ್ಮ ಕಿವಿಗಳನ್ನು ತೆರೆ ಯಿರಿ. ಯೆಹೋವನು ಹೇಳುತ್ತಾನೆ, ''ಹೇಗೆ ದೊಡ್ಡ ಧ್ವನಿಯಲ್ಲಿ ಅಳಬೇಕೆಂಬುದನ್ನು ನಿಮ್ಮ ಹೆಣ್ಣುಮಕ್ಕಳಿಗೆ ಕಲಿಸಿಕೊಡಿ. ಪ್ರತಿಯೊಬ್ಬ ಸ್ತ್ರೀಯು ಈ ಶೋಕಗೀತೆಯನ್ನು ಹಾಡಲು ಕಲಿಯಬೇಕು.

21 'ಮೃತ್ಯುವು ಬಂದು ನಮ್ಮ ಕಿಟಕಿಗಳಿಂದ ಇಳಿದಿದೆ. ಮೃತ್ಯುವು ನಮ್ಮ ಅರಮನೆಗಳಲ್ಲಿ ಪ್ರವೇಶ ಮಾಡಿದೆ. ಬೀದಿಯಲ್ಲಿ ಆಡುವ ನಮ್ಮ ಮಕ್ಕಳಿಗೆ ಮೃತ್ಯುವು ಹಿಡಿದುಕೊಂಡಿದೆ. ಸಾರ್ವಜನಿಕ ಸ್ಥಳ ಗಳಲ್ಲಿ ಸೇರುವ ನಮ್ಮ ಯುವಕರಿಗೆ ಮೃತ್ಯುವು ಹಿಡಿದುಕೊಂಡಿದೆ.'

22 ''ಯೆರೆಮೀಯನೇ, ಯೆಹೋವನು ಹೀಗೆ ಹೇಳುತ್ತಾನೆಂದು ಹೇಳು: 'ಹೊಲಗಳಲ್ಲಿ ಗೊಬ್ಬರ ಬಿದ್ದಂತೆ ಹೆಣಗಳು ಬೀಳುವವು. ಆ ಶವಗಳು ಹೊಲ ಕೊಯ್ಯುವವನ ಹಿಂದೆ ಯಾರೂ ಎತ್ತದೆ ಬಿದ್ದಿರುವ ಮೆದೆಗಳಂತೆ ಬಿದ್ದಿರುವವು.'''

23 ಯೆಹೋವನು ಹೇಳುತ್ತಾನೆ, ''ಜ್ಞಾನಿಗಳು ತಮ್ಮ ಜ್ಞಾನದ ಬಗ್ಗೆ ಜಂಬಕೊಚ್ಚಿಕೊಳ್ಳಬಾರದು. ಬಲ ಶಾಲಿಗಳು ತಮ್ಮ ಬಲದ ಬಗ್ಗೆ ಬಡಾಯಿ ಕೊಚ್ಚಿ ಕೊಳ್ಳಬಾರದು. ಶ್ರೀಮಂತರು ತಮ್ಮ ಸಂಪತ್ತಿನ ಬಗ್ಗೆ ಜಂಬ ಕೊಚ್ಚಿಕೊಳ್ಳಬಾರದು.

24 ಯಾವನಾದರೂ ಜಂಬಕೊಚ್ಚಿಕೊಳ್ಳಬೇಕಾದರೆ, ಅವನು ನನ್ನನ್ನು ಅರಿತಿರುವುದಾಗಿಯೂ ನನ್ನನ್ನೂ ತಿಳಿದುಕೊಂಡಿರುವುದಾಗಿಯೂ ಜಂಬಪಡಲಿ. ನಾನೇ ಯೆಹೋವನೆಂದು ತಿಳಿದುಕೊಂಡಿರುವು ದಕ್ಕಾಗಿ ಅವನು ಜಂಬಪಡಲಿ. ನಾನು ದಯಾ ವಂತನೂ ನ್ಯಾಯವಂತನೂ ಆಗಿರುವೆ, ನಾನು ಭೂಲೋಕದಲ್ಲಿ ಒಳ್ಳೆಯದನ್ನು ಮಾಡುತ್ತೇನೆ ಎಂದು ತಿಳಿದುಕೊಂಡಿರುವವನು ಹೆಮ್ಮೆಪಡಲಿ. ಆಗ ನನಗೆ ಸಂತೋಷವಾಗುವುದು.'' ಇದು ಯೆಹೋವನ ನುಡಿ.

25 ''ಕೇವಲ ದೈಹಿಕವಾಗಿ ಸುನ್ನತಿಯನ್ನು ಮಾಡಿಕೊಂಡ
ಜನರನ್ನು ನಾನು ಶಿಕ್ಷಿಸುವ ಕಾಲ ಬರಲಿದೆ. 26 ನಾನು
ಈಜಿಪ್ಟ್, ಯೆಹೂದ, ಎದೋಮ್, ಅಮ್ಮೋನ್,

---

**ನರಿಗಳು** ಇವು ನಿಜವಾದ ನರಿಗಳಲ್ಲ. ನಾಯಿ ಜಾತಿಗೆ ಸೇರಿದ ಒಂದು ಬಗೆಯ ಕಾಡುಪ್ರಾಣಿ. ಜನರಿಲ್ಲದ ಸ್ಥಳಗಳಲ್ಲಿ ಮಾತ್ರ ಇವು ವಾಸಿಸುತ್ತವೆ.

ಮೋವಾಬ್ ಜನಾಂಗಗಳ ಜನರ ಬಗ್ಗೆ ಮತ್ತು ಮರಳು
ಪ್ರದೇಶದಲ್ಲಿ ವಾಸ ಮಾಡುತ್ತಿರುವ ಎಲ್ಲಾ ಜನಗಳ ಬಗ್ಗೆ
ಮಾತನಾಡುತ್ತಿದ್ದೇನೆ. ಈ ಎಲ್ಲಾ ದೇಶಗಳ ಜನರಿಗೆ
ದೈಹಿಕವಾಗಿ ಸುನ್ನತಿ ಆಗಿದ್ದಿಲ್ಲ. ಆದರೆ ಇಸ್ರೇಲ್ ವಂಶ
ದವರು ಹೃದಯ ಸುನ್ನತಿಯಿಲ್ಲದವರು'' ಎಂದು
ಯೆಹೋವನು ಅನ್ನುತ್ತಾನೆ.

### ಯೆಹೋವನು ಮತ್ತು ವಿಗ್ರಹಗಳು

10 ಇಸ್ರೇಲ್ ವಂಶದವರೇ, ಯೆಹೋವನ
ಮಾತುಗಳನ್ನು ಕೇಳಿರಿ. 2 ಯೆಹೋವನು ಹೀಗೆ
ಹೇಳುತ್ತಾನೆ:

''ಬೇರೆ ಜನಾಂಗಗಳಂತೆ ಜೀವಿಸಬೇಡಿ. ಆಕಾಶ
ದಲ್ಲಿ ಕಾಣುವ ವಿಶೇಷ ಉತ್ಪಾತಗಳಿಗೆ ಹೆದರ
ಬೇಡಿರಿ. ಆಕಾಶದಲ್ಲಿ ಕಾಣುವ ಉತ್ಪಾತಗಳಿಗೆ
ಬೇರೆ ಜನಾಂಗಗಳು ಹೆದರುತ್ತವೆ. ಆದರೆ ನೀವು
ಅವುಗಳಿಗೆ ಹೆದರಬಾರದು.
3 ಬೇರೆ ಜನರ ಸಂಪ್ರದಾಯಗಳು ನಿಷ್ಪ್ರಯೋಜಕ
ವಾದವುಗಳಾಗಿವೆ. ಅವರ ವಿಗ್ರಹಗಳು ಅರಣ್ಯದ
ಮರವಲ್ಲದೆ ಮತ್ತೇನಲ್ಲ. ಅವರ ವಿಗ್ರಹಗಳು
ಬಡಗಿಯು ಉಳಿಯಿಂದ ಮಾಡಲ್ಪಟ್ಟವುಗಳು.
4 ಅವರು ತಮ್ಮ ವಿಗ್ರಹಗಳನ್ನು ಬೆಳ್ಳಿ ಬಂಗಾರಗ
ಳಿಂದ ಸುಂದರವಾಗಿ ಅಲಂಕರಿಸುತ್ತಾರೆ. ಸುತ್ತಿಗೆ
ಯಿಂದ ಮೊಳೆ ಬಡಿದು ಅವುಗಳು ಬೀಳದಂತೆ
ನಿಲ್ಲಿಸುತ್ತಾರೆ.
5 ಬೇರೆ ಜನಾಂಗದವರು ವಿಗ್ರಹಗಳು ಸವತೆಯ
ತೋಟಗಳಲ್ಲಿ ನಿಲ್ಲಿಸುವ ಬೆದರುಗಂಬಗ
ಳಂತಿವೆ.* ಅವರ ವಿಗ್ರಹಗಳು ಮಾತಾಡಲಾರವು;
ಅವು ನಡೆಯಲಾರವು. ಜನರು ಆ ವಿಗ್ರಹಗಳನ್ನು
ಹೊತ್ತುಕೊಂಡು ಹೋಗಬೇಕು. ಆದುದರಿಂದ ಆ
ವಿಗ್ರಹಗಳಿಗೆ ಹೆದರಬೇಡಿರಿ. ಅವು ನಿಮಗೆ
ಕೇಡನ್ನು ಮಾಡಲಾರವು; ಸಹಾಯವನ್ನೂ ಮಾಡ
ಲಾರವು.''

6 ''ಯೆಹೋವನೇ ನಿನ್ನಂತೆ ಯಾರೂ ಇಲ್ಲ. ನೀನೇ
ಮಹೋನ್ನತನು. ನಿಮ್ಮ ನಾಮವೂ ಮಹೋನ್ನತ
ವಾದದ್ದು; ಸಾಮರ್ಥ್ಯಪೂರ್ಣವಾದದ್ದು.
7 ದೇವರೇ, ಪ್ರತಿಯೊಬ್ಬರೂ ನಿನ್ನನ್ನು ಗೌರವಿಸ
ಬೇಕು. ನೀನು ಪ್ರತಿಯೊಂದು ಜನಾಂಗಕ್ಕೂ ರಾಜ
ನಾಗಿರುವೆ. ಅವರೆಲ್ಲರೂ ನಿನಗೆ ಗೌರವ ತೋರಿಸ
ಬೇಕು. ಜನಾಂಗಗಳಲ್ಲಿ ಎಷ್ಟೋ ಮಂದಿ ಜ್ಞಾನಿ
ಗಳಿದ್ದಾರೆ ಆದರೆ ಅವರಲ್ಲಿ ಒಬ್ಬರೂ ನಿನ್ನಷ್ಟು
ಜ್ಞಾನಿಗಳಲ್ಲ.
8 ಬೇರೆ ಜನಾಂಗಗಳ ಎಲ್ಲಾ ಜನರು ಮಂದಬುದ್ಧಿ
ಯವರಾಗಿದ್ದಾರೆ ಮತ್ತು ಮೂರ್ಖರಾಗಿದ್ದಾರೆ;
ಅವರ ಉಪದೇಶಗಳು ನಿಷ್ಪ್ರಯೋಜಕವಾದ
ಮರದ ಬೊಂಬೆಗಳಿಂದ ಬಂದವುಗಳಾಗಿವೆ.
9 ಅವರು ತಾರ್ಷೀಷ್ ನಗರದ ಬೆಳ್ಳಿಯಿಂದಲೂ
ಊಫಜ್ ನಗರದ ಬಂಗಾರದಿಂದಲೂ ತಮ್ಮ
ವಿಗ್ರಹಗಳನ್ನು ಮಾಡುತ್ತಾರೆ. ಆ ವಿಗ್ರಹಗಳನ್ನು
ಬಡಗಿಗಳು, ಕಮ್ಮಾರರು ಮತ್ತು ಅಕ್ಕಸಾಲಿಗರು
ಮಾಡುತ್ತಾರೆ; ಅವರು ನೀಲಿ ಮತ್ತು ಕಂದು
ಬಣ್ಣದ ಬಟ್ಟೆಗಳನ್ನು ಆ ವಿಗ್ರಹಗಳಿಗೆ ತೊಡಿಸು
ತ್ತಾರೆ. ಅವು ಕುಶಲರ ಕೌಶಲ್ಯವಾಗಿವೆ.
10 ಯೆಹೋವನೊಬ್ಬನೇ ನಿಜವಾದ ದೇವರು.
ಆತನು ನಿಜವಾಗಿಯೂ ಜೀವಸ್ವರೂಪನಾಗಿ
ದ್ದಾನೆ. ಆತನು ಶಾಶ್ವತವಾಗಿ ಆಳುವ ರಾಜನಾಗಿ
ದ್ದಾನೆ. ಆತನು ಕೋಪಿಸಿಕೊಂಡಾಗ ಭೂಮಿಯು
ನಡುಗುತ್ತದೆ. ಜನಾಂಗಗಳು ಆತನ ಕೋಪವನ್ನು
ತಡೆಯಲಾರವು.

11 ''ಯೆಹೋವನು ಹೇಳುತ್ತಾನೆ, ''ಈ ಸಂದೇಶವನ್ನು
ಆ ಜನರಿಗೆ ಹೇಳು: 'ಆ ಸುಳ್ಳುದೇವರುಗಳು
ಭೂಲೋಕವನ್ನೂ ಪರಲೋಕವನ್ನೂ ಸೃಷ್ಟಿ
ಮಾಡಿಲ್ಲ. ಆ ಸುಳ್ಳುದೇವರುಗಳನ್ನು ನಾಶಮಾಡ
ಲಾಗುವುದು; ಅವುಗಳು ಭೂಲೋಕದಿಂದಲೂ
ಆಕಾಶದಿಂದಲೂ ಕಣ್ಮರೆಯಾಗುವವು.'''
12 ದೇವರು ತನ್ನ ಶಕ್ತಿಯಿಂದ ಭೂಲೋಕವನ್ನು
ಸೃಷ್ಟಿಸಿದನು. ದೇವರು ತನ್ನ ಜ್ಞಾನದಿಂದ ಈ ಜಗ
ತ್ತನ್ನು ನಿರ್ಮಿಸಿದನು. ತನ್ನ ವಿವೇಕದಿಂದ ದೇವರು
ಈ ಭೂಮಂಡಲದ ಮೇಲೆ ಆಕಾಶವನ್ನು
ಹೊದಿಸಿದ್ದಾನೆ.
13 ಯೆಹೋವನು ಗರ್ಜಿಸುವ ಗುಡುಗನ್ನು ಬರ
ಮಾಡುತ್ತಾನೆ. ಆತನು ಆಕಾಶದಿಂದ ನೀರನ್ನು
ಮಹಾಪ್ರವಾಹದಂತೆ ಸುರಿಸುತ್ತಾನೆ. ಆತನು
ಭೂಮಿಯ ಎಲ್ಲೆಡೆಯಿಂದ ಮೇಘಗಳು ಆಕಾ ಶಕ್ಕೆ
ಏರಿಹೋಗುವಂತೆ ಮಾಡುತ್ತಾನೆ. ಆತನು
ಮಳೆಯೊಂದಿಗೆ ಸಿಡಿಲನ್ನು ಬೀಳಿಸುತ್ತಾನೆ. ತನ್ನ
ಭಂಡಾರದಿಂದ ಹೊರಗೆ ಗಾಳಿ ಬೀಸುವಂತೆ
ಮಾಡುತ್ತಾನೆ.
14 ಜನರು ಬುದ್ಧಿಗೇಡಿಗಳಾಗಿದ್ದಾರೆ. ತಾವು
ಕೆತ್ತಿದ ವಿಗ್ರಹಗಳಿಂದ ಅಕ್ಕಸಾಲಿಗರು ಮೋಸ

---

**ಬೆದರುಗಂಬ** ಹೊಲಗದ್ದೆಗಳಲ್ಲಿ ಪಕ್ಷಿಗಳನ್ನು ಹೆದರಿಸುವ ವಿಚಿತ್ರಾಕಾರ
ದ ಮರದ ಕಂಬ.

ಹೋಗುತ್ತಾರೆ. ಆ ವಿಗ್ರಹಗಳು ಕೇವಲ ಸುಳ್ಳಿನ
ಕಂತೆಗಳು. ಅವುಗಳಲ್ಲಿ ಜೀವವಿಲ್ಲ.*
15 ಆ ವಿಗ್ರಹಗಳು ನಿಷ್ಪ್ರಯೋಜಕ ವಸ್ತುಗಳಾಗಿವೆ.
ಅವು ಅಪಹಾಸ್ಯಕ್ಕೆ ಯೋಗ್ಯವಾದವುಗಳಾಗಿವೆ.
ನ್ಯಾಯನಿರ್ಣಯದ ಸಮಯದಲ್ಲಿ ಆ ವಿಗ್ರಹ
ಗಳನ್ನು ನಾಶಪಡಿಸಲಾಗುವುದು.
16 ಆದರೆ ಯಾಕೋಬ್ಯರ ದೇವರು ಆ ವಿಗ್ರಹಗ
ಳಂತಲ್ಲ. ಆತನು ಸಮಸ್ತವನ್ನೂ ನಿರ್ಮಿಸಿದಾತ
ನಾಗಿದ್ದಾನೆ. ಇಸ್ರೇಲು ಆತನ ಸ್ವಾಸ್ತ್ಯವಾದ
ಜನಾಂಗ. ‘‘ಸರ್ವಶಕ್ತನಾದ ಯೆಹೋವ’’
ಎಂಬುದು ಆತನ ನಾಮಧೇಯ.

### ವಿನಾಶವು ಬರುತ್ತಿದೆ

17 ನಿಮ್ಮದಾದ ಎಲ್ಲವನ್ನು ತೆಗೆದುಕೊಂಡು ಇಲ್ಲಿಂದ
ಹೊರಡುವುದಕ್ಕೆ ಸಿದ್ಧರಾಗಿರಿ. ಯೆಹೂದದ ಜನ
ರಾದ ನೀವು ನಗರದಲ್ಲಿ ಸಿಕ್ಕಿ ಹಾಕಿಕೊಂಡಿದ್ದೀರಿ.
ವೈರಿಯು ನಗರವನ್ನು ಮುತ್ತಿದ್ದಾನೆ.
18 ಯೆಹೋವನು ಹೇಳುತ್ತಾನೆ: ‘‘ಈ ಸಲ ಯೆಹೂ
ದದ ಜನರನ್ನು ನಾನು ದೇಶದಿಂದ ಹೊರಗೆ
ತಳ್ಳುತ್ತೇನೆ. ಅವರಿಗೆ ನಾನು ನೋವು ಮತ್ತು ಕಷ್ಟ
ಗಳನ್ನು ತರುತ್ತೇನೆ. ಅವರು ಪಾಠ ಕಲಿಯುವದ
ಕ್ಕೋಸ್ಕರ ನಾನು ಹೀಗೆ ಮಾಡುತ್ತೇನೆ.’’
19 ಅಯ್ಯೋ, ನನಗೆ (ಯೆರೆಮೀಯನಿಗೆ) ತುಂಬಾ
ಪೆಟ್ಟಾಗಿದೆ. ನನಗೆ ಗಾಯವಾಗಿದೆ; ನನಗೆ ವಾಸಿ
ಯಾಗುತ್ತಿಲ್ಲ. ಆದರೂ ‘‘ಇದು ನನ್ನ ವ್ಯಾಧಿ,
ಇದನ್ನು ನಾನು ಅನುಭವಿಸಬೇಕು’’ ಎಂದು
ಸಮಾಧಾನ ತಂದುಕೊಂಡೆ.
20 ನನ್ನ ಗುಡಾರವು ಹಾಳಾಗಿದೆ. ಗುಡಾರದ ಎಲ್ಲಾ
ಹಗ್ಗಗಳು ಕಿತ್ತುಹೋಗಿವೆ. ನನ್ನ ಮಕ್ಕಳು ನನ್ನನ್ನು
ಬಿಟ್ಟು ಹೊರಟು ಹೋಗಿದ್ದಾರೆ. ನನ್ನ ಗುಡಾರ
ವನ್ನು ಹಾಕುವದಕ್ಕೆ ಯಾರೂ ಉಳಿದಿಲ್ಲ. ನನಗಾಗಿ
ಒಂದು ನೆರಳು ನಿರ್ಮಿಸುವದಕ್ಕೆ ಯಾರೂ
ಉಳಿದಿಲ್ಲ.
21 ಕುರುಬರು ಬುದ್ಧಿಗೇಡಿಗಳಾಗಿದ್ದಾರೆ. ಅವರು
ಯೆಹೋವನನ್ನು ಹುಡುಕುವ ಪ್ರಯತ್ನ ಮಾಡು
ವುದಿಲ್ಲ. ಅವರು ಜ್ಞಾನಿಗಳಲ್ಲ, ಅವರ ಹಿಂಡುಗಳು
ಚದರಿಹೋಗುವವು ಕಳೆದುಹೋಗುವವು.
22 ಕೇಳಿರಿ, ಉತ್ತರ ದಿಕ್ಕಿನಿಂದ ಬರುತ್ತಿರುವ ಮಹಾ
ಧ್ವನಿಯನ್ನು! ಇದು ಯೆಹೂದದ ನಗರಗಳನ್ನು
ನಾಶಮಾಡುತ್ತದೆ. ಯೆಹೂದವು ಒಂದು ಬರಿ
ದಾದ ಮರಳುಗಾಡಾಗುವದು. ನರಿಗಳ ನಿವಾಸ
ವಾಗುವುದು.
23 ಯೆಹೋವನೇ, ಮಾನವನ ಜೀವ ಅವನ ಸ್ವಾಧೀನ
ದಲ್ಲಿಲ್ಲವೆಂಬುದು ನನಗೆ ಗೊತ್ತು. ಜನರಿಗೆ
ಸರಿಯಾದ ಜೀವನ ಕ್ರಮ ಗೊತ್ತಿಲ್ಲ.
24 ಯೆಹೋವನೇ, ನಮ್ಮನ್ನು ತಿದ್ದು, ಆದರೆ ಕಠೋರ
ನಾಗಬೇಡ, ಕೋಪದಲ್ಲಿ ನಮ್ಮನ್ನು ದಂಡಿಸ
ಬೇಡ.
25 ನಿನಗೆ ಕೋಪ ಬಂದಿದ್ದರೆ ಬೇರೆ ಜನಾಂಗಗಳನ್ನು
ಶಿಕ್ಷಿಸು. ಅವರು ನಿನ್ನನ್ನು ಅರಿಯದವರಾಗಿದ್ದಾರೆ;
ಗೌರವಿಸದವರಾಗಿದ್ದಾರೆ. ಅವರು ನಿನ್ನನ್ನು
ಆರಾಧಿಸುವುದಿಲ್ಲ. ಆ ಜನಾಂಗಗಳು ಯಾಕೋ
ಬ್ಯರ ವಂಶವನ್ನು ನಾಶಮಾಡಿದರು. ಅವರು
ಇಸ್ರೇಲನ್ನು ಸಂಪೂರ್ಣವಾಗಿ ನಾಶಮಾಡಿದರು.
ಅವರು ಇಸ್ರೇಲರ ವಾಸಸ್ಥಳವನ್ನು ನಾಶ
ಮಾಡಿದರು.

### ಒಡಂಬಡಿಕೆಯ ಉಲ್ಲಂಘನೆ

11 ಯೆರೆಮೀಯನಿಗೆ ಈ ಸಂದೇಶ ಯೆಹೋವ
ನಿಂದ ಬಂದಿತು: 2‘‘ಯೆರೆಮೀಯನೇ, ಈ
ಒಡಂಬಡಿಕೆಯ ವಚನಗಳನ್ನು ಕೇಳು, ಈ ವಿಷಯಗಳ
ಬಗ್ಗೆ ಯೆಹೂದದ ಜನರಿಗೂ ಜೆರುಸಲೇಮಿನಲ್ಲಿರುವ
ಜನರಿಗೂ ಹೇಳು. 3ಇಸ್ರೇಲಿನ ದೇವರಾದ ಯೆಹೋ
ವನು ಹೀಗೆ ಹೇಳುತ್ತಾನೆ, ‘ಈ ಒಡಂಬಡಿಕೆಯನ್ನು
ಪಾಲಿಸದೆ ಇದ್ದವರಿಗೆ ಕೇಡಾಗುತ್ತದೆ.’ 4ನಾನು ನಿಮ್ಮ
ಪೂರ್ವಿಕರ ಸಂಗಡ ಮಾಡಿಕೊಂಡ ಒಡಂಬಡಿಕೆಯ ಬಗ್ಗೆ
ಮಾತನಾಡುತ್ತಿದ್ದೇನೆ. ನಾನು ಈಜಿಪ್ಟಿನಿಂದ ಅವರನ್ನು
ಹೊರತಂದಾಗ ನಾನು ಅವರೊಂದಿಗೆ ಈ ಒಡಂಬಡಿಕೆ
ಯನ್ನು ಮಾಡಿಕೊಂಡೆ. ಈಜಿಪ್ಟು ಅನೇಕ ಕಷ್ಟಗಳ
ನಾಡಾಗಿತ್ತು. ಅದು ಕಬ್ಬಿಣವನ್ನು ಕರಗಿಸುವ ಉರಿಯುವ
ಕುಲುಮೆಯಂತಿತ್ತು. ನಾನು ಅವರಿಗೆ, ‘ನನ್ನ ಆಜ್ಞಾ
ಪಾಲನೆಯನ್ನು ಮಾಡಿರಿ ಮತ್ತು ನಾನು ಹೇಳಿದಂತೆ ಎಲ್ಲ
ವನ್ನು ಮಾಡಿರಿ. ಆಗ ನೀವು ನನ್ನ ಭಕ್ತರಾಗುವಿರಿ, ನಾನು
ನಿಮ್ಮ ದೇವರಾಗುವೆನು’ ಎಂದೆ.
5‘‘ನಾನು ನಿಮ್ಮ ಪೂರ್ವಿಕರಿಗೆ ಮಾಡಿದ ವಾಗ್ದಾನವನ್ನು
ನೆರವೇರಿಸಲು ನಾನು ಇದೆಲ್ಲವನ್ನು ಮಾಡಿದೆ. ನಾನು
ಅವರಿಗೆ ಫಲವತ್ತಾದ ಭೂಮಿಯನ್ನೂ ಹಾಲು ಮತ್ತು
ಜೇನು ಹರಿಯುವ ಪ್ರದೇಶವನ್ನೂ ಕೊಡುವ ವಾಗ್ದಾನ
ಮಾಡಿದ್ದೆ. ನೀವು ಈಗ ಈ ಪ್ರದೇಶದಲ್ಲಿ ವಾಸ
ಮಾಡುತ್ತಿದ್ದೀರಿ.’’ ನಾನು, ‘‘ಯೆಹೋವನೇ ನಿನ್ನ ಅಪ್ಪಣೆ
ಯಂತಾಗಲಿ’’ ಎಂದು ಉತ್ತರಿಸಿದೆನು.

---

**ಅವುಗಳಲ್ಲಿ ಜೀವವಿಲ್ಲ** ಅಕ್ಷರಶಃ ಅವುಗಳಲ್ಲಿ ಆತ್ಮವಿಲ್ಲ. ಅವುಗಳು ಜೀವಂತವಾಗಿಲ್ಲ ಎಂದಾಗಲೀ ದೇವರಾತ್ಮವು ಅವುಗಳಲ್ಲಿಲ್ಲ ಎಂದಾಗಲೀ ಇದು ಅರ್ಥಕೊಡಬಲ್ಲದು.

6 ಯೆಹೋವನು ನನಗೆ, ‘‘ಯೆರೆಮೀಯನೇ, ಯೆಹೂ
ದದ ಪಟ್ಟಣಗಳಲ್ಲಿ ಮತ್ತು ಜೆರುಸಲೇಮಿನ ಬೀದಿಗಳಲ್ಲಿ
ಈ ಸಂದೇಶವನ್ನು ಸಾರು. ಈ ಒಡಂಬಡಿಕೆಯಲ್ಲಿನ
ಮಾತುಗಳನ್ನು ಕೇಳಿ ಅನುಸರಿಸಿರಿ.

7 ನಾನು ನಿಮ್ಮ ಪೂರ್ವಿಕರನ್ನು ಈಜಿಪ್ಟಿನಿಂದ ಹೊರ
ತಂದಾಗ ಅವರಿಗೆ ಒಂದು ಮುನ್ನೆಚ್ಚರಿಕೆಯನ್ನು
ಕೊಟ್ಟೆನು. ಇಂದಿನವರೆಗೂ ನಾನು ಮತ್ತೆ ಮತ್ತೆ ಅವರಿಗೆ
ಮುನ್ನೆಚ್ಚರಿಕೆಯನ್ನು ಕೊಟ್ಟೆ, ನನ್ನ ಆಜ್ಞಾಪಾಲನೆ ಮಾಡ
ಬೇಕೆಂದು ಅವರಿಗೆ ಹೇಳಿದೆ. 8 ಆದರೆ ನಿಮ್ಮ ಪೂರ್ವಿಕರು
ನನ್ನ ಮಾತನ್ನು ಕೇಳಲಿಲ್ಲ. ಅವರು ಮೊಂಡರಾಗಿದ್ದು ತಮ್ಮ
ದುಷ್ಟಹೃದಯ ಹೇಳಿದಂತೆ ಮಾಡಿದರು. ಆಜ್ಞಾಪಾಲನೆ
ಮಾಡದಿದ್ದರೆ ಅವರಿಗೆ ಕೆಡುಕಾಗುವದೆಂದು ಒಡಂಬಡಿಕೆ
ಯಲ್ಲಿ ಹೇಳಲಾಗಿದೆ. ಅದಕ್ಕಾಗಿ ನಾನು ಅವರಿಗೆ
ಕೇಡುಂಟಾಗುವಂತೆ ಮಾಡಿದೆ, ಒಡಂಬಡಿಕೆಯನ್ನು
ಪಾಲಿಸಬೇಕೆಂದು ನಾನು ಅವರಿಗೆ ಆಜ್ಞಾಪಿಸಿದೆ ಆದರೆ
ಅವರು ಪಾಲಿಸಲಿಲ್ಲ.’’

9 ಯೆಹೋವನು ನನಗೆ, ‘‘ಯೆರೆಮೀಯನೇ, ಯೆಹೂ
ದದ ಜನರೂ ಜೆರುಸಲೇಮಿನಲ್ಲಿ ವಾಸಮಾಡುವ
ಜನರೂ ಒಳಸಂಚನ್ನು ಮಾಡಿದ್ದಾರೆ. 10 ಅವರು ತಮ್ಮ
ಪೂರ್ವಿಕರು ಮಾಡಿದ ಪಾಪಗಳನ್ನೇ ಮಾಡುತ್ತಿದ್ದಾರೆ.
ಅವರ ಪೂರ್ವಿಕರು ನನ್ನ ಸಂದೇಶವನ್ನು ಕೇಳಲು ಒಪ್ಪ
ಲಿಲ್ಲ. ಅವರು ಬೇರೆ ದೇವರುಗಳನ್ನು ಅನುಸರಿಸಿ
ಪೂಜಿಸಿದರು. ನಾನು ಅವರ ಪೂರ್ವಿಕರ ಸಂಗಡ ಮಾಡಿ
ಕೊಂಡ ಒಡಂಬಡಿಕೆಯನ್ನು ಯೆಹೂದ ಮತ್ತು ಇಸ್ರೇಲ
ವಂಶದವರು ಮೀರಿದ್ದಾರೆ.’’

11 ಯೆಹೋವನು ಹೇಳುತ್ತಾನೆ, ‘‘ನಾನು ಶೀಘ್ರವಾಗಿ
ಯೆಹೂದದ ಜನರಿಗೆ ಏನಾದರೊಂದು ಭಯಂಕರ
ಅನಾಹುತ ಸಂಭವಿಸುವಂತೆ ಮಾಡುತ್ತೇನೆ. ಅವರು ಅದ
ರಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವದಿಲ್ಲ. ಅವರು
ಪಶ್ಚಾತ್ತಾಪಪಡುವರು. ಅವರು ಸಹಾಯಕ್ಕಾಗಿ ನನಗೆ
ಮೊರೆಯಿಡುವರು. ಆದರೆ ನಾನು ಅವರ ಮೊರೆಯನ್ನು
ಕೇಳುವದಿಲ್ಲ.

12 ಯೆಹೂದದ ಪಟ್ಟಣಗಳ ಜನರು ಮತ್ತು
ಜೆರುಸಲೇಮ್ ನಗರದ ಜನರು ತಮ್ಮ ವಿಗ್ರಹಗಳ ಹತ್ತಿರ
ಹೋಗಿ ಸಹಾಯಕ್ಕಾಗಿ ಪ್ರಾರ್ಥಿಸುವರು. ಆ ವಿಗ್ರಹಗಳ
ಮುಂದೆ ಅವರು ಧೂಪಹಾಕುವರು. ಆದರೆ ಕೇಡು
ಬಂದಾಗ ಯೆಹೂದದ ಜನರಿಗೆ ಸಹಾಯಮಾಡಲು ಆ
ವಿಗ್ರಹಗಳಿಗೆ ಸಾಧ್ಯವಾಗುವದಿಲ್ಲ.

13 ‘‘ಯೆಹೂದದ ಜನರೇ, ನೀವು ಅನೇಕ ವಿಗ್ರಹ
ಗಳನ್ನು ಇಟ್ಟುಕೊಂಡಿದ್ದೀರಿ. ಯೆಹೂದದಲ್ಲಿ ಎಷ್ಟು
ಪಟ್ಟಣಗಳಿವೆಯೋ, ಅಷ್ಟು ವಿಗ್ರಹಗಳಿವೆ. ತುಚ್ಛ ದೇವ
ರಾದ ಬಾಳನನ್ನು ಪೂಜಿಸಲು ನೀವು ಅನೇಕ ಬಲಿ
ಪೀಠಗಳನ್ನು ಕಟ್ಟಿಕೊಂಡಿದ್ದೀರಿ. ಜೆರುಸಲೇಮಿನಲ್ಲಿ
ಎಷ್ಟು ಬೀದಿಗಳಿವೆಯೋ ಅಷ್ಟು ಬಲಿಪೀಠಗಳಿವೆ.

14 ‘‘ಯೆರೆಮೀಯನೇ, ಈ ಯೆಹೂದದ ಜನರಿಗಾಗಿ
ಬೇಡಿಕೊಳ್ಳಬೇಡ. ಅವರಿಗಾಗಿ ಮೊರೆಯಿಡಬೇಡ.
ಅವರಿಗಾಗಿ ಪ್ರಾರ್ಥನೆ ಮಾಡಿದರೂ ನಾನು ಕೇಳುವ
ದಿಲ್ಲ. ಆ ಜನರು ತೊಂದರೆಯನ್ನು ಅನುಭವಿಸುವರು.
ಆಗ ಅವರು ಸಹಾಯಕ್ಕಾಗಿ ನನಗೆ ಮೊರೆಯಿಡುವರು.
ಆದರೆ ನಾನು ಕೇಳುವದಿಲ್ಲ.

15 ‘‘ನನ್ನ ಪ್ರೇಯಸಿ (ಯೆಹೂದ) ನನ್ನ ಪವಿತ್ರ
ಆಲಯದಲ್ಲಿ ಏಕೆ ಇದ್ದಾಳೆ? ಇಲ್ಲಿ ಇರಲು ಅವಳಿಗೆ
ಅಧಿಕಾರವಿಲ್ಲ. ಅವಳು ಅನೇಕ ದುಷ್ಟಕಾರ್ಯಗ
ಳನ್ನು ಮಾಡಿದ್ದಾಳೆ. ಯೆಹೂದವೇ, ಹರಕೆಗಳಿಂದ
ಮತ್ತು ಪ್ರಾಣಿಗಳ ಬಲಿಯಿಂದ ನಿನ್ನ ವಿನಾಶವನ್ನು
ತಡೆಯಬಹುದೆಂದು ತಿಳಿದುಕೊಂಡಿರುವಿಯಾ?
ನನಗೆ ಹೋಮವನ್ನು ಅರ್ಪಿಸಿ ಶಿಕ್ಷೆಯಿಂದ ತಪ್ಪಿಸಿ
ಕೊಳ್ಳಬಹುದೆಂದು ತಿಳಿದುಕೊಂಡಿರುವಿಯಾ?’’

16 ಯೆಹೋವನು ನಿನಗೆ ‘ನೋಡಲು ಸುಂದರವಾದ
ಹಸಿರು ಆಲೀವ್ ಮರವೆಂದು’ ಹೆಸರು ಕೊಟ್ಟನು.
ಆದರೆ ಯೆಹೋವನು ಬಿರುಗಾಳಿ ಬೀಸಿ ಆ ಮರಕ್ಕೆ
ಬೆಂಕಿ ಇಡುವನು. ಆಗ ಅದರ ರೆಂಬೆಗಳು ಸುಟ್ಟು
ಹೋಗುವವು.

17 ಸರ್ವಶಕ್ತನಾದ ಯೆಹೋವನು ನಿಮ್ಮನ್ನು ನೆಟ್ಟನು.
ನಿಮಗೆ ಕೇಡು ಬರುವದೆಂದು ಆತನು ಸಾರಿರು
ವನು. ಏಕೆಂದರೆ ಇಸ್ರೇಲ್ ವಂಶವೂ ಯೆಹೂದ
ವಂಶವೂ ದುಷ್ಕಾರ್ಯಗಳನ್ನು ಮಾಡಿವೆ. ಬಾಳ
ನಿಗೆ ಹೋಮವನ್ನರ್ಪಿಸಿ ನನಗೆ ಕೋಪ ಬರುವಂತೆ
ಮಾಡಿವೆ.’’

### ಯೆರೆಮೀಯನ ವಿರುದ್ಧ ಒಳಸಂಚು

18 ಅನಾತೋತಿನ * ಜನರು ನನ್ನ ವಿರುದ್ಧ ಮಾಡುತ್ತಿ
ರುವ ಕುತಂತ್ರವನ್ನೂ ಮಾಡುವ ಕೃತ್ಯಗಳನ್ನೂ ಯೆಹೋ
ವನು ನನಗೆ ತೋರಿಸಿದನು. ಆದ್ದರಿಂದ ಅವರು ನನ್ನ
ವಿರೋಧಿಗಳೆಂದು ನಾನು ತಿಳಿದುಕೊಂಡೆನು. 19 ಜನರು
ನನ್ನ ವಿರುದ್ಧ ಕೆಲಸ ಮಾಡುತ್ತಿದ್ದಾರೆಂಬುದನ್ನು ಯೆಹೋ
ವನು ನನಗೆ ತೋರಿಸುವ ಮುಂಚೆ ನಾನು ವಧೆಗಾಗಿ
ತೆಗೆದುಕೊಂಡು ಹೋದ ಸಾಧುಕುರಿಯಂತೆ ಇದ್ದೆನು.
ಅವರು ನನ್ನ ವಿರೋಧಿಗಳೆಂದು ನಾನು ತಿಳಿದುಕೊಂಡಿರ
ಲಿಲ್ಲ. ಅವರು ನನ್ನ ಬಗ್ಗೆ ಹೀಗೆ ಹೇಳುತ್ತಿದ್ದರು: ‘‘ಮರ
ವನ್ನು ಮತ್ತು ಅದರ ಫಲಗಳನ್ನು ನಾಶಮಾಡೋಣ;

---

**ಅನಾತೋತ್** ಯೆರೆಮೀಯನ ಸ್ವಂತ ಊರು. ಅವನ ವಿರುದ್ಧವಾಗಿ ಹೊಂಚುಹಾಕುತ್ತಿದ್ದ ಜನರಲ್ಲಿ ಅವನ ಸಂಬಂಧಿಕರೂ ಸೇರಿದ್ದರು.

ಅವನನ್ನು ಕೊಂದುಬಿಡೋಣ; ಜನರು ಅವನನ್ನು ಮರೆತು ಬಿಡುವರು.'' [20]ಆದರೆ ಯೆಹೋವನೇ, ನೀನು ನ್ಯಾಯಪರನಾದ ತೀರ್ಪುಗಾರ. ಜನರ ಹೃದಯವನ್ನು ಮತ್ತು ಬುದ್ಧಿಯನ್ನು ಹೇಗೆ ಪರೀಕ್ಷಿಸಬೇಕೆಂದು ನಿನಗೆ ಗೊತ್ತು. ನಾನು ನನ್ನ ವಾದವನ್ನು ನಿನ್ನ ಮುಂದೆ ಮಂಡಿಸುತ್ತೇನೆ, ಮತ್ತು ನೀನು ಅವರಿಗೆ ತಕ್ಕ ಶಿಕ್ಷೆಯನ್ನು ಕೊಡು ಎಂದು ಅರಿಕೆ ಮಾಡಿಕೊಳ್ಳುತ್ತೇನೆ.

[21]ಅನಾತೋತಿನ ಜನರು ಯೆರೆಮೀಯನನ್ನು ಕೊಲೆ ಮಾಡಬೇಕೆಂದು ಯೋಚಿಸುತ್ತಿದ್ದರು. ಆ ಜನರು ಯೆರೆಮೀಯನಿಗೆ ''ಯೆಹೋವನ ಹೆಸರಿನಿಂದ ನೀನು ಪ್ರವಾದಿಸಬೇಡ, ನೀನು ಹಾಗೆ ಮಾಡಿದರೆ ನಾವು ನಿನ್ನ ಕೊಲೆ ಮಾಡುವೆವು'' ಎಂದರು. ಅನಾತೋತಿನ ಆ ಜನರ ಬಗ್ಗೆ ಯೆಹೋವನು ಒಂದು ನಿರ್ಣಯವನ್ನು ತೆಗೆದು ಕೊಂಡನು. [22]ಸರ್ವಶಕ್ತನಾದ ಯೆಹೋವನು, ''ನಾನು ಕೂಡಲೇ ಅನಾತೋತಿನ ಜನರನ್ನು ದಂಡಿಸುವೆನು. ಅವರ ಯುವಕರೆಲ್ಲ ಯುದ್ಧದಲ್ಲಿ ಮಡಿದು ಹೋಗು ವರು. ಅವರ ಗಂಡುಮಕ್ಕಳು ಮತ್ತು ಹೆಣ್ಣುಮಕ್ಕಳು ಹಸಿವಿ ನಿಂದ ಸತ್ತುಹೋಗುವರು. [23]ಅನಾತೋತ್ ನಗರದಲ್ಲಿ ಒಬ್ಬನೂ ಉಳಿಯುವುದಿಲ್ಲ; ಯಾರೂ ಬದುಕುವದಿಲ್ಲ. ನಾನು ಅವರನ್ನು ದಂಡಿಸುತ್ತೇನೆ. ಅವರಿಗೆ ಏನಾದರೂ ಕೇಡಾಗುವಂತೆ ಮಾಡುತ್ತೇನೆ'' ಎಂದು ಹೇಳಿದನು.

## ದೇವರಲ್ಲಿ ಯೆರೆಮೀಯನ ದೂರು

12 ಯೆಹೋವನೇ, ನಾನು ನಿನ್ನ ಜೊತೆ ವಾದ
ಮಾಡಿದರೆ, ನೀನು ಯಾವಾಗಲೂ ನ್ಯಾಯ
ಪರನೆಂಬುದು ರುಜುವಾಗುತ್ತದೆ. ಆದರೂ
ನ್ಯಾಯಪೂರ್ಣವಲ್ಲದ ಕೆಲವು ವಿಷಯಗಳ ಬಗ್ಗೆ
ನಾನು ನಿನ್ನನ್ನು ಕೇಳಬಯಸುತ್ತೇನೆ. ದುಷ್ಟರು ಏಕೆ
ಅಭಿವದ್ಧಿ ಹೊಂದುತ್ತಾರೆ? ನಿನ್ನ ವಿಶ್ವಾಸಕ್ಕೆ
ಪಾತ್ರರಾಗದವರು ನೆಮ್ಮದಿಯ ಜೀವನ ನಡೆಸಲು
ಹೇಗೆ ಸಾಧ್ಯ?

2 ''ನೀನು ಆ ದುಷ್ಟರನ್ನು ಇಲ್ಲಿ ಇಟ್ಟಿರುವೆ. ಅವರು
ಆಳವಾಗಿ ಬೇರುಬಿಟ್ಟ ಸಸಿಗಳಂತಿದ್ದಾರೆ, ಅವು ಬೆಳೆ
ಯುತ್ತವೆ, ಹಣ್ಣು ಬಿಡುತ್ತವೆ. ನೀನು ಅವರಿಗೆ
ತುಂಬ ಹತ್ತಿರದವನು ಮತ್ತು ಪ್ರೀತಿಪಾತ್ರನು
ಎಂದು ಅವರು ಬಾಯಿಂದ ಹೇಳುತ್ತಾರೆ. ಆದರೆ
ಹೃದಯದಿಂದ ಅವರು ನಿನ್ನಿಂದ ತುಂಬಾ
ದೂರದಲ್ಲಿದ್ದಾರೆ.

3 ಆದರೆ ಯೆಹೋವನೇ, ನಿನಗೆ ನನ್ನ ಹೃದಯದ
ಬಗ್ಗೆ ತಿಳಿದಿದೆ, ನೀನು ನನ್ನನ್ನು ನೋಡಿ ನನ್ನ
ಮನಸ್ಸನ್ನು ಪರೀಕ್ಷಿಸುವೆ. ವಧೆಗೆ ಎಳೆದುಕೊಂಡು
ಹೋಗುವ ಕುರಿಗಳಂತೆ ಆ ಕೆಡುಕರನ್ನು ಎಳೆದು
ಹಾಕು. ಅವರನ್ನು ವಧೆಯ ದಿನಕ್ಕೆಂದು ಆರಿಸು.

4 ಎಷ್ಟು ಕಾಲದವರೆಗೆ ಭೂಮಿಯು ಒಣಗಿರ
ಬೇಕು? ಎಷ್ಟು ಕಾಲದವರೆಗೆ ಹುಲ್ಲು ಒಣಗಿ
ನಿರ್ಜೀವವಾಗಿರಬೇಕು? ದೇಶದಲ್ಲಿ ಪಶುಪಕ್ಷಿ
ಗಳು ಸತ್ತುಹೋಗಿವೆ. ಇದು ದುಷ್ಟರ ತಪ್ಪಾದರೂ
ಆ ದುಷ್ಟರು, ''ನಮಗೆ ಏನಾಗುವದೆಂದು
ನೋಡಲು ಯೆರೆಮೀಯನು ಬಹಳ ದಿವಸ
ಬದುಕಿರಲಾರ'' ಎಂದು ಹೇಳುತ್ತಿದ್ದಾರೆ.

## ಯೆರೆಮೀಯನಿಗೆ ದೇವರ ಉತ್ತರ

5 ''ಯೆರೆಮೀಯನೇ, ನೀನು ಕಾಲಾಳುಗಳ ಸಂಗಡ
ಓಡಿ ಆಯಾಸಗೊಂಡಿರುವುದಾದರೆ, ಕುದುರೆಗ
ಳೊಂದಿಗೆ ಓಡಿ ಹೇಗೆ ಗೆಲ್ಲುವೆ? ಸುರಕ್ಷಿತವಾದ
ದೇಶದಲ್ಲಿ ನೀನು ದಣಿದುಕೊಂಡರೆ ಜೋರ್ಡನ್
ನದಿ ದಡದ ಭಯಾನಕ ಮುಳ್ಳು ಕಂಟಿಯ
ಪ್ರದೇಶಕ್ಕೆ ಬಂದಾಗ ಏನು ಮಾಡುವೆ?

6 ಈ ಜನರು ನಿನ್ನ ಸ್ವಂತ ಸಹೋದರರಾಗಿದ್ದಾರೆ.
ನಿನ್ನ ಸ್ವಂತ ಕುಟುಂಬದ ಜನರೇ ನಿನ್ನ ವಿರುದ್ಧ
ಕೂಗಾಡುತ್ತಾ ಸಂಚು ಮಾಡುತ್ತಿದ್ದಾರೆ. ಅವರು
ನಿನ್ನೊಡನೆ ಸ್ನೇಹಿತರಂತೆ ಮಾತನಾಡಿದರೂ
ಅವರನ್ನು ನಂಬಬೇಡ.''

## ಯೆಹೋವನು ತನ್ನ ಜನರನ್ನೂ ಯೆಹೂದವನ್ನೂ ನಿರಾಕರಿಸುವನು

7 ''ನಾನು (ಯೆಹೋವನು) ನನ್ನ ಮನೆಯನ್ನು ತ್ಯಜಿಸಿ
ದ್ದೇನೆ. ನಾನು ನನ್ನ ಆಸ್ತಿಯನ್ನು ಬಿಟ್ಟುಬಿಟ್ಟಿದ್ದೇನೆ.
ನಾನು ನನ್ನ ಪ್ರಿಯತಮೆಯನ್ನು (ಯೆಹೂದ)
ಅವಳ ಶತ್ರುಗಳಿಗೆ ಕೊಟ್ಟಿದ್ದೇನೆ.

8 ನನ್ನ 'ಸ್ವಾಸ್ಥ್ಯವಾದ ಜನರು' ನನಗೊಂದು ಅರ
ಣ್ಯದ ಸಿಂಹದಂತಾಗಿದ್ದಾರೆ. ಅವರು ನನ್ನನ್ನು
ಕಂಡು ಗರ್ಜಿಸುತ್ತಾರೆ. ಆದ್ದರಿಂದಲೇ ನಾನು
ಅವರಿಗೆ ವಿಮುಖನಾದೆನು.

9 ನನ್ನ 'ಸ್ವಾಸ್ಥ್ಯವಾದ ಜನರು' ಹದ್ದುಗಳಿಂದ ಸುತ್ತು
ವರಿಯಲ್ಪಟ್ಟು ಸಾಯುತ್ತಿರುವ ಪ್ರಾಣಿಯಂತಾಗಿ
ದ್ದಾರೆ. ಆ ಪಕ್ಷಿಗಳು ಅವರ ಸುತ್ತಲೂ ಹಾರಾಡು
ತ್ತವೆ. ಕಾಡುಪ್ರಾಣಿಗಳೇ, ಬನ್ನಿ, ಬನ್ನಿ. ಬಂದು
ನಿಮ್ಮ ಆಹಾರವನ್ನು ತೆಗೆದುಕೊಳ್ಳಿ.

10 ಅನೇಕ ಕುರುಬರು ದ್ರಾಕ್ಷಿತೋಟವನ್ನು ಹಾಳು
ಮಾಡಿದ್ದಾರೆ. ಆ ಕುರುಬರು ನನ್ನ ತೋಟದ ಸಸಿ
ಗಳನ್ನು ತುಳಿದುಬಿಟ್ಟಿದ್ದಾರೆ; ನನ್ನ ಸುಂದರವಾದ
ತೋಟವನ್ನು ಮರಳುಗಾಡನ್ನಾಗಿ ಮಾಡಿದ್ದಾರೆ.

11 ಹೌದು, ಮರಳುಭೂಮಿಯನ್ನಾಗಿ ಮಾಡಿದ್ದಾರೆ. ಅದು ಒಣಗಿಹೋಗಿ ನಿಸತ್ವವಾಗಿದೆ. ಅಲ್ಲಿ ಯಾರೂ ವಾಸಿಸುವದಿಲ್ಲ. ಇಡೀ ದೇಶವೇ ಬರಿದಾದ ಮರಳುಗಾಡಾಗಿದೆ. ಆ ತೋಟವನ್ನು ನೋಡಿಕೊಳ್ಳುವದಕ್ಕೆ ಯಾರೂ ಉಳಿದಿಲ್ಲ.
12 ಅನೇಕ ಸೈನಿಕರು ಆ ಬೋಳು ಬೆಟ್ಟಗಳನ್ನು ತುಳಿದುಕೊಂಡು ಹೋದರು. ಆ ಸೈನ್ಯಗಳಿಂದ ಯೆಹೋವನು ಆ ದೇಶವನ್ನು ದಂಡಿಸಿದನು. ಆ ದೇಶದ ಒಂದು ತುದಿಯಿಂದ ಇನ್ನೊಂದು ತುದಿಯವರೆಗೆ ವಾಸಿಸಿದ ಎಲ್ಲಾ ಜನರನ್ನು ದಂಡಿಸಲಾಯಿತು. ಯಾರೂ ಸುರಕ್ಷಿತವಾಗಿ ಉಳಿಯಲಿಲ್ಲ.
13 ಜನರು ಗೋಧಿಯನ್ನು ಬಿತ್ತುವರು; ಆದರೆ ಅವರು ಕೇವಲ ಮುಳ್ಳಿನ ರಾಶಿಯನ್ನು ಕೊಯ್ಯುವರು. ಅವರು ತುಂಬ ದಣಿಯುವವರೆಗೆ ಕಷ್ಟಪಟ್ಟು ಕೆಲಸ ಮಾಡುವರು. ಆದರೆ ಆ ಎಲ್ಲಾ ಕೆಲಸದ ಪ್ರತಿಫಲವಾಗಿ ಅವರಿಗೆ ಏನೂ ಸಿಗುವದಿಲ್ಲ. ಅವರು ತಮ್ಮ ಬೆಳೆಗಳಿಂದ ನಾಚಿಕೆಪಟ್ಟುಕೊಳ್ಳುವರು. ಯೆಹೋವನ ರೋಷವು ಹಾಗೆಲ್ಲ ಮಾಡುವದು.''

### ಇಸ್ರೇಲಿನ ನೆರೆಯವರಿಗೆ ಯೆಹೋವನ ವಾಗ್ದಾನ

[14]ಯೆಹೋವನು ಹೀಗೆ ಹೇಳುತ್ತಾನೆ: ''ಇಸ್ರೇಲ್
ಪ್ರದೇಶದ ಸುತ್ತಮುತ್ತ ವಾಸಮಾಡುವ ಜನರಿಗಾಗಿ ನಾನು
ಏನು ಮಾಡುವೆನೆಂಬುದನ್ನು ನಿಮಗೆ ಹೇಳುವೆನು. ಆ
ಜನರು ತುಂಬ ದುಷ್ಟರಾಗಿದ್ದಾರೆ. ನಾನು ಇಸ್ರೇಲಿನ ಜನ
ರಿಗೆ ಕೊಟ್ಟ ಪ್ರದೇಶವನ್ನು ಅವರು ಹಾಳು ಮಾಡಿದರು.
ನಾನು ಆ ಜನರನ್ನು ಅವರ ಪ್ರದೇಶದಿಂದ ಹೊರಗೆ
ಎಸೆಯುವೆನು. ನಾನು ಅವರೊಂದಿಗೆ ಯೆಹೂದದ ಜನ
ರನ್ನೂ ಎಸೆಯುವೆನು. [15]ಬಳಿಕ ನಾನು ಅವರಿಗಾಗಿ ಪರಿ
ತಪಿಸುವೆನು. ನಾನು ಪ್ರತಿಯೊಂದು ಕುಟುಂಬವನ್ನು
ಅದರ ಸ್ವಾಸ್ತ್ಯಕ್ಕೂ ಅದರ ದೇಶಕ್ಕೂ ಕರೆತರುವೆನು. [16]ಆ
ಜನರು ತಮ್ಮ ಪಾಠಗಳನ್ನು ಸರಿಯಾಗಿ ಕಲಿತುಕೊಳ್ಳ
ಬೇಕೆಂಬುದು ನನ್ನ ಅಪೇಕ್ಷೆ. ಮೊದಲು, ಆ ಜನರು
ಬಾಳನ ಹೆಸರೆತ್ತಿ ಪ್ರಮಾಣ ಮಾಡುವುದನ್ನು ನನ್ನ ಜನರಿಗೆ
ಕಲಿಸಿಕೊಟ್ಟರು. ಈಗ ಆ ಜನರು ಅದೇ ರೀತಿಯಲ್ಲಿ ತಮ್ಮ
ಪಾಠವನ್ನು ಕಲಿತುಕೊಳ್ಳಬೇಕೆಂಬುದು ನನ್ನ ಇಚ್ಛೆ.
ಅವರು, 'ಯೆಹೋವನ ಜೀವದಾಣೆ' ಎಂದು ಹೇಳಿದರೆ
ಅವರನ್ನು ಅಭಿವೃದ್ಧಿಪಡಿಸಿ ಅವರನ್ನು ನಮ್ಮ ಜನರ ಮಧ್ಯ
ದಲ್ಲಿ ನೆಲೆಗೊಳಿಸುವೆನು. [17]ಯಾವ ಜನಾಂಗವಾದರೂ
ನನ್ನ ಸಂದೇಶವನ್ನು ಕೇಳದೆಹೋದರೆ ಅದನ್ನು ಸಂಪೂ
ರ್ಣವಾಗಿ ನಾಶಮಾಡುವೆನು. ಒಣಗಿ ಸತ್ತುಹೋದ
ಸಸಿಯಂತೆ ಅದನ್ನು ಕಿತ್ತು ಎಸೆದುಬಿಡುವೆನು.'' ಇದು
ಯೆಹೋವನಿಂದ ಬಂದ ಸಂದೇಶ.

### ನಡುಪಟ್ಟಿಯ ಸಂಕೇತ

13 ಯೆಹೋವನು ನನಗೆ ಹೀಗೆ ಹೇಳಿದನು,
''ಯೆರೆಮೀಯನೇ, ಹೋಗಿ ಒಂದು ನಾರಿನ
ನಡುಪಟ್ಟಿಯನ್ನು ಕೊಂಡುಕೊ. ಅದನ್ನು ನಿನ್ನ ಸೊಂಟಕ್ಕೆ
ಸುತ್ತಿಕೊ. ಆ ನಡುಪಟ್ಟಿ ನೀರಿನಲ್ಲಿ ನೆನೆಯದಂತೆ
ನೋಡಿಕೋ.''
[2]ಯೆಹೋವನು ಹೇಳಿದಂತೆ ನಾನು ಒಂದು ನಾರಿನ
ನಡುಪಟ್ಟಿಯನ್ನು ಕೊಂಡು ತಂದೆನು. ಅದನ್ನು ನನ್ನ
ಸೊಂಟಕ್ಕೆ ಸುತ್ತಿಕೊಂಡೆನು. [3]ಆಗ ಎರಡನೇ ಸಲ ನನಗೆ
ಯೆಹೋವನ ಸಂದೇಶ ಬಂದಿತು. [4]ಆ ಸಂದೇಶವಿದು,
''ಯೆರೆಮೀಯನೇ, ನೀನು ಕೊಂಡು ತಂದು ಸುತ್ತಿ
ಕೊಂಡ ನಡುಪಟ್ಟಿಯನ್ನು ತೆಗೆದುಕೊಂಡು ಪೆರಾತಗೆ
ಹೋಗು. ಆ ನಡುಪಟ್ಟಿಯನ್ನು ಬೆಟ್ಟದ ಸಂದಿನಲ್ಲಿ
ಬಚ್ಚಿಡು.''
[5]ಆದುದರಿಂದ ನಾನು ಪೆರಾತ್‌ಗೆ ಹೋದೆ. ಯೆಹೋ
ವನು ಹೇಳಿದ ಪ್ರಕಾರ ನಡುಪಟ್ಟಿಯನ್ನು ಬಚ್ಚಿಟ್ಟೆ. [6]ಬಹಳ
ದಿನಗಳಾದ ತರುವಾಯ, ಯೆಹೋವನು ನನಗೆ,
''ಯೆರೆಮೀಯನೇ, ಪೆರಾತ್‌ಗೆ ಹೋಗು, ನಾನು ನಿನಗೆ
ಅಲ್ಲಿ ಬಚ್ಚಿಡಲು ಹೇಳಿದ ನಡುಪಟ್ಟಿಯನ್ನು ತೆಗೆದು
ಕೊಂಡು ಬಾ'' ಎಂದು ಹೇಳಿದನು.
[7]ನಾನು ಪೆರಾತ್‌ಗೆ ಹೋದೆ ಮತ್ತು ನಡುಪಟ್ಟಿಯನ್ನು
ಬಚ್ಚಿಟ್ಟ ಬೆಟ್ಟದ ಸಂದಿನಿಂದ ಹೊರತೆಗೆದೆ. ಆದರೆ ಆ ನಡು
ಪಟ್ಟಿ ಹಾಳಾಗಿಹೋಗಿತ್ತು. ನಾನು ಅದನ್ನು ಧರಿಸಲಾಗ
ಲಿಲ್ಲ. ಅದು ಯಾವುದಕ್ಕೂ ಪ್ರಯೋಜನವಿರಲಿಲ್ಲ.
[8]ಆಗ ನನಗೆ ಯೆಹೋವನ ಸಂದೇಶ ಬಂದಿತು.
[9]ಯೆಹೋವನು ಹೀಗೆ ಹೇಳಿದನು, ''ನಡುಪಟ್ಟಿಯು
ಹಾಳಾಗಿ ನಿಷ್ಪ್ರಯೋಜಕವಾಗಿದೆ. ಅಂತೆಯೇ ನಾನು
ಯೆಹೂದದ ಮತ್ತು ಜೆರುಸಲೇಮಿನ ಜಂಬದ ಜನರನ್ನು
ಹಾಳುಮಾಡುತ್ತೇನೆ. [10]ಯೆಹೂದದಲ್ಲಿ ದುಷ್ಟರೂ
ಗರ್ವಿಷ್ಠರೂ ಆಗಿರುವ ಜನರನ್ನು ಹಾಳುಮಾಡುವೆನು.
ಅವರು ನನ್ನ ಸಂದೇಶವನ್ನು ಕೇಳುವುದಿಲ್ಲ. ಅವರು ಹಟ
ಮಾರಿಗಳೂ ತಮ್ಮ ಮನಸ್ಸಿಗೆ ಬಂದಂತೆ ಮಾಡುವವರೂ
ಆಗಿದ್ದಾರೆ. ಅವರು ಬೇರೆ ದೇವರುಗಳನ್ನು ಅನುಸರಿಸು
ತ್ತಾರೆ ಮತ್ತು ಪೂಜಿಸುತ್ತಾರೆ. ಯೆಹೂದದ ಜನರು ಈ
ನಾರಿನ ನಡುಪಟ್ಟಿಯಂತೆ ಆಗುವರು. ಅವರು ಹಾಳಾಗಿ
ನಿಷ್ಪ್ರಯೋಜಕರಾಗುವರು. [11]ಪುರುಷನೊಬ್ಬನು ನಡು
ಪಟ್ಟಿಯನ್ನು ಬಿಗಿಯಾಗಿ ಸೊಂಟಕ್ಕೆ ಸುತ್ತಿಕೊಳ್ಳುವಂತೆ
ನಾನು ಇಸ್ರೇಲಿನ ಎಲ್ಲಾ ವಂಶಗಳನ್ನು ಮತ್ತು

ಯೆಹೂದದ ಎಲ್ಲಾ ವಂಶಗಳನ್ನು ನನ್ನ ಸುತ್ತಲೂ ಬಿಗಿದು
ಕೊಳ್ಳುವೆ.’’ ಇದು ಯೆಹೋವನಿಂದ ಬಂದ ಮಾತು.
‘‘ಅವರು ನನ್ನ ಜನರಾಗುವರು ಎಂದುಕೊಂಡು ನಾನು
ಹಾಗೆ ಮಾಡಿದೆ. ನನ್ನ ಜನರು ನನಗೆ ಕೀರ್ತಿ, ಸ್ತುತಿ,
ಗೌರವ ತರುವರೆಂದು ತಿಳಿದಿದ್ದೆ. ಆದರೆ ನನ್ನ ಜನರು ನನ್ನ
ಮಾತನ್ನು ಕೇಳದೆ ಹೋದರು.’’

## ಯೆಹೂದಿಗೆ ಕೊಟ್ಟ ಎಚ್ಚರಿಕೆಗಳು

12‘‘ಯೆರೆಮೀಯನೇ, ಯೆಹೂದದ ಜನರಿಗೆ,
‘ಇಸ್ರೇಲಿನ ದೇವರಾದ ಯೆಹೋವನು ಪ್ರತಿಯೊಂದು
ಚರ್ಮದ ಬುದ್ದಲಿಯು ದ್ರಾಕ್ಷಾರಸದಿಂದ ತುಂಬಿರ
ಬೇಕು ಎಂದು ಹೇಳುತ್ತಾನೆ’ ಎಂದು ಹೇಳು. ಆಗ ಆ
ಜನರು ನಕ್ಕು, ‘ಪ್ರತಿಯೊಂದು ಚರ್ಮದ ಬುದ್ದಲಿಯು
ದ್ರಾಕ್ಷಾರಸದಿಂದ ತುಂಬಿರಬೇಕೆಂಬುದು ನಮಗೆ ಚೆನ್ನಾಗಿ
ಗೊತ್ತು’ ಎಂದು ನಿನಗೆ ಹೇಳುತ್ತಾರೆ. 13ಆಗ ನೀನು
ಅವರಿಗೆ, ‘ಯೆಹೋವನು ಹೀಗೆ ಹೇಳುತ್ತಾನೆ ಎಂದು
ಹೇಳು. ಈ ಪ್ರದೇಶದಲ್ಲಿ ವಾಸಮಾಡುವ ಪ್ರತಿಯೊಬ್ಬ
ಮನುಷ್ಯನನ್ನು ಕುಡಿದು ಮತ್ತನಾದವನಂತೆ ಅಸಹಾಯ
ಕನನ್ನಾಗಿ ಮಾಡುತ್ತೇನೆ. ನಾನು ದಾವೀದನ ಸಿಂಹಾಸನದ
ಮೇಲೆ ಕುಳಿತುಕೊಳ್ಳುವ ರಾಜರ ಬಗ್ಗೆ ಹೇಳುತ್ತಿದ್ದೇನೆ.
ನಾನು ಯಾಜಕರ, ಪ್ರವಾದಿಗಳ ಮತ್ತು ಜೆರುಸಲೇ
ಮಿನಲ್ಲಿ ವಾಸಿಸುವ ಎಲ್ಲಾ ಜನರ ಬಗ್ಗೆಯೂ ಹೇಳುತ್ತಿ
ದ್ದೇನೆ. 14ಯೆಹೂದದ ಜನರು ಎಡವಿ, ಒಬ್ಬರ
ಮೇಲೊಬ್ಬರು ಬೀಳುವಂತೆ ನಾನು ಮಾಡುವೆನು. ತಂದೆ
ಮತ್ತು ಮಕ್ಕಳು ಒಬ್ಬರ ಮೇಲೊಬ್ಬರು ಬೀಳುವರು’’’
ಇದು ಯೆಹೋವನ ನುಡಿ. ‘‘‘ನಾನು ಅವರಿಗಾಗಿ ಕನಿಕರ
ಪಡುವದಿಲ್ಲ ಅಥವಾ ಕರುಣೆ ತೋರಿಸುವದಿಲ್ಲ. ಯೆಹೂ
ದದ ಜನರ ವಿನಾಶವನ್ನು ಕರುಣೆಯು ತಡೆಯದಂತೆ
ನೋಡಿಕೊಳ್ಳುತ್ತೇನೆ.’’’

15 ಕೇಳಿರಿ, ಗಮನ ಕೊಡಿರಿ; ದೇವರು ನಿಮಗೆ
ಹೇಳಿದ್ದಾನೆ. ಗರ್ವಪಡಬೇಡಿರಿ.
16 ನಿಮ್ಮ ದೇವರಾದ ಯೆಹೋವನು ಅಂಧಕಾರ
ವನ್ನು ಉಂಟುಮಾಡುವ ಮೊದಲೇ ಆತನನ್ನು
ಗೌರವಿಸಿರಿ. ಕಗ್ಗತ್ತಲಿನ ಬೆಟ್ಟಗಳ ಮೇಲೆ ನೀವು
ಬೀಳುವ ಮೊದಲೇ ಆತನನ್ನು ಸ್ತುತಿಸಿರಿ. ಯೆಹೂ
ದದ ಜನರಾದ ನೀವು ಬೆಳಕನ್ನು ನಿರೀಕ್ಷಿಸು
ತ್ತಿದ್ದೀರಿ. ಆದರೆ ಯೆಹೋವನು ಬೆಳಕನ್ನು
ಗಾಡಾಂಧಕಾರವನ್ನಾಗಿ ಪರಿವರ್ತಿಸುವನು.
17 ಯೆಹೂದದ ಜನರಾದ ನೀವು ಯೆಹೋವನ
ಮಾತನ್ನು ಕೇಳದಿದ್ದರೆ, ನಾನು ಗುಟ್ಟಾದ ಸ್ಥಳದಲ್ಲಿ
ಅಳುವೆನು. ನಿಮ್ಮ ಅಹಂಕಾರವು ನನ್ನನ್ನು ಅಳುವ
ಹಾಗೆ ಮಾಡುವುದು. ನಾನು ಬಹಳ ಗಟ್ಟಿಯಾಗಿ
ಅಳುವೆನು, ನನ್ನ ಕಣ್ಣುಗಳಿಂದ ಕಣ್ಣೀರು
ಹೊರಸೂಸುವುದು. ಏಕೆಂದರೆ ಯೆಹೋವನ
ಮಂದೆಯು ಸೆರೆಹಿಡಿಯಲ್ಪಡುವುದು.
18 ಈ ಸಂಗತಿಗಳನ್ನು ರಾಜನಿಗೂ ರಾಣಿಗೂ ಹೇಳಿರಿ:
‘‘ನಿಮ್ಮ ಸಿಂಹಾಸನಗಳಿಂದ ಕೆಳಗಿಳಿದು ಬನ್ನಿ. ನಿಮ್ಮ
ಸುಂದರವಾದ ಕಿರೀಟಗಳು ನಿಮ್ಮ ತಲೆಯಿಂದ
ಉರುಳಿ ಕೆಳಗೆ ಬಿದ್ದಿವೆ’’ ಎಂದು ಹೇಳಿರಿ.
19 ನೆಗೆವ್ ಮರುಭೂಮಿಯ ಎಲ್ಲಾ ನಗರಗಳಿಗೆ
ಬೀಗಹಾಕಲಾಗಿದೆ. ಅವುಗಳನ್ನು ತೆರೆಯುವುದು
ಯಾರಿಂದಲೂ ಸಾಧ್ಯವಿಲ್ಲ. ಯೆಹೂದದ ಎಲ್ಲಾ
ಜನರು ಸೆರೆ ಒಯ್ಯಲ್ಪಟ್ಟಿದ್ದಾರೆ. ಅವರೆಲ್ಲರನ್ನು ಸೆರೆ
ಯಾಳುಗಳಾಗಿ ತೆಗೆದುಕೊಂಡು ಹೋಗಲಾಗಿದೆ.
20 ಜೆರುಸಲೇಮೇ, ಮುಖವೆತ್ತಿ ನೋಡು. ಉತ್ತರ
ದಿಕ್ಕಿನಿಂದ ಬರುವ ಶತ್ರುಗಳನ್ನು ನೋಡು. ನಿಮ್ಮ
ಮಂದೆ* ಎಲ್ಲಿದೆ? ದೇವರು ನಿನಗೆ ಆ ಸುಂದರ
ವಾದ ಮಂದೆಯನ್ನು ದಯಪಾಲಿಸಿದನು. ನೀನು
ಆ ಮಂದೆಯನ್ನು ನೋಡಿಕೊಳ್ಳಬೇಕಾಗಿತ್ತು.
21 ಯೆಹೋವನು ನಿನಗೆ ಆ ಮಂದೆಯ ಲೆಕ್ಕವ
ನ್ನೊಪ್ಪಿಸು ಎಂದು ಕೇಳಿದರೆ ಏನು ಹೇಳುವೆ? ಜನ
ರಿಗೆ ದೇವರ ಬಗ್ಗೆ ತಿಳಿಸುವದು ನಿನ್ನ ಕರ್ತವ್ಯ
ವಾಗಿತ್ತು. ನಿನ್ನ ನಾಯಕರು ಜನರಿಗೆ ಮಾರ್ಗ
ದರ್ಶನ ಮಾಡಬೇಕಾಗಿತ್ತು. ಆದರೆ ಅವರು ತಮ್ಮ
ಕೆಲಸವನ್ನು ಮಾಡಲಿಲ್ಲ. ಆದುದರಿಂದ ನಿನಗೆ
ಹೆಚ್ಚಿನ ನೋವು ಮತ್ತು ಕಷ್ಟಗಳು ಉಂಟಾಗುವವು.
ಪ್ರಸವವೇದನೆಯಂಥ ನೋವು ನಿನಗಾಗುವುದು.
22 ‘‘ಇಂಥ ಕೇಡು ನನಗೆ ಏಕೆ ಉಂಟಾಯಿತು?’’
ಎಂದು ನಿನ್ನನ್ನು ನೀನೇ ಕೇಳಿಕೊಳ್ಳಬಹುದು.
ನೀನು ಮಾಡಿದ ಅನೇಕ ಪಾಪಗಳ ಫಲದಿಂದಲೇ
ಆಯಿತು. ನಿನ್ನ ಪಾಪಗಳ ಫಲವಾಗಿ ನಿನ್ನ ಲಂಗ
ವನ್ನು ಹರಿಯಲಾಯಿತು. ನಿನ್ನ ಪಾದರಕ್ಷೆಯನ್ನು
ಕಿತ್ತುಕೊಳ್ಳಲಾಯಿತು. ನಿನ್ನನ್ನು ಕಂಗೆಡಿಸುವದ
ಕ್ಕಾಗಿ ಅವರು ಹೀಗೆ ಮಾಡಿದರು.
23 ಕರಿಯನು ತನ್ನ ಚರ್ಮದ ಬಣ್ಣವನ್ನು ಬದಲಿಸ
ಲಾರನು. ಚಿರತೆಯು ತನ್ನ ಮೈಮೇಲಿನ ಕಪ್ಪು ಕಲೆ
ಗಳನ್ನು ಬದಲಾಯಿಸಲಾರದು. ಅದೇ ರೀತಿ,
ಜೆರುಸಲೇಮ್ ನಗರವೇ, ನೀನು ಸಹ ಮಾರ್ಪಾ
ಟುಹೊಂದಿ ಒಳ್ಳೆಯದನ್ನು ಮಾಡಲಾರೆ. ನೀನು
ಯಾವಾಗಲೂ ಕೆಟ್ಟದ್ದನ್ನೇ ಮಾಡುವೆ.

---

**ಮಂದೆ** ಇಲ್ಲಿ ಮಂದೆ ಎಂದರೆ ಜೆರುಸಲೇಮಿನ ಸುತ್ತಮುತ್ತಲಿನ ಪಟ್ಟಣಗಳು. ಜೆರುಸಲೇಮ್ ಒಬ್ಬ ಕುರುಬನಂತೆ ಇದ್ದು ಯೆಹೂದದ ಉಳಿದ ಪಟ್ಟಣಗಳು ಅವನ ಮಂದೆಗಳು ಇದ್ದಂತೆ ಎಂಬ ಭಾವ.

24 ‘‘ನಾನು ನಿಮಗೆ ನಿಮ್ಮ ಮನೆಗಳನ್ನು ಬಿಟ್ಟು ಓಡಿ ಹೋಗುವಂತೆ ಒತ್ತಾಯ ಮಾಡುತ್ತೇನೆ. ನೀವು ಎಲ್ಲಾ ದಿಕ್ಕುಗಳಲ್ಲಿಯೂ ಓಡಿಹೋಗುವಿರಿ. ನೀವು ಮರುಭೂಮಿಯ ಗಾಳಿಯಿಂದ ಹಾರಿ ಹೋಗುವ ಹೊಟ್ಟಿನಂತಾಗುವಿರಿ.

25 ನಿಮ್ಮ ಗತಿ ಹೀಗಾಗುವದು. ನನ್ನ ಯೋಜನೆಗಳಲ್ಲಿ ಇದು ನಿಮ್ಮ ಪಾತ್ರ’’ ಇದು ಯೆಹೋವನ ನುಡಿ. ‘‘ಏಕೆ ಹೀಗಾಗುವದು? ಏಕೆಂದರೆ ನೀವು ನನ್ನನ್ನು ಮರೆತು ಬಿಟ್ಟಿರಿ. ಸುಳ್ಳು ದೇವರುಗಳನ್ನು ನಂಬಿದಿರಿ.

26 ಜೆರುಸಲೇಮ್ ನಗರವೇ, ನಾನು ನಿನ್ನ ಲಂಗವನ್ನು ನಿನ್ನ ಮುಖದವರೆಗೆ ಎತ್ತಿಬಿಡುತ್ತೇನೆ. ಎಲ್ಲರೂ ನಿನ್ನನ್ನು ನೋಡುತ್ತಾರೆ. ನಿನಗೆ ನಾಚಿಕೆ ಯಾಗುತ್ತದೆ.

27 ನೀವು ಮಾಡಿದ ಭಯಾನಕ ಕೃತ್ಯಗಳನ್ನು ನಾನು ನೋಡಿದ್ದೇನೆ. ನಿನ್ನ ಪ್ರಿಯತಮರ ಜೊತೆಗೆ ನಗುವ ದನ್ನೂ ಕಾಮಕೇಳಿಯಾಡುವದನ್ನೂ ನಾನು ನೋಡಿದ್ದೇನೆ. ನೀನು ವೈಶ್ಯೆಯಂತೆ ನಡೆದುಕೊಳ್ಳ ಬೇಕೆಂದು ಯೋಚನೆ ಮಾಡಿದ್ದು ನನಗೆ ಗೊತ್ತು. ನಾನು ನಿನ್ನನ್ನು ಹೊಲಗಳಲ್ಲಿಯೂ ಬೆಟ್ಟಗಳ ಲ್ಲಿಯೂ ನೀನು ಮಾಡಿದ ಅಸಹ್ಯಕಾರ್ಯಗಳನ್ನು ನೋಡಿದ್ದೇನೆ. ಜೆರುಸಲೇಮೇ, ಇದರಿಂದ ನಿನಗೆ ತುಂಬಾ ಕೇಡಾಗುವದು. ನೀನು ಎಷ್ಟು ದಿನ ಹೀಗೆಯೇ ನಿನ್ನ ಪಾಪ ಕಾರ್ಯಗಳನ್ನು ಮುಂದು ವರಿಸುವೆ ಎಂದು ನಾನು ಯೋಚಿಸುತ್ತಿದ್ದೇನೆ.’’

### ಕ್ಷಾಮ ಮತ್ತು ಸುಳ್ಳು ಪ್ರವಾದಿಗಳು

14 ಇದು ಕ್ಷಾಮದ ಬಗ್ಗೆ ಯೆರೆಮೀಯನಿಗೆ ಯೆಹೋವನ ಸಂದೇಶ:

2 ‘‘ಯೆಹೂದ ಜನಾಂಗವು ಸತ್ತುಹೋದವರಿಗಾಗಿ ಗೋಳಾಡುವುದು. ಯೆಹೂದದ ನಗರಗಳಲ್ಲಿದ್ದ ಜನರು ದಿನೇ ದಿನೇ ನಿರ್ಬಲರಾಗುತ್ತಾರೆ. ಆ ಜನರು ನೆಲದ ಮೇಲೆ ಬಿದ್ದು ಬಿಡುತ್ತಾರೆ. ಜೆರುಸ ಲೇಮ್ ನಗರದಿಂದ ಜನರು ಸಹಾಯಕ್ಕಾಗಿ ಯೆಹೋವನಿಗೆ ಮೊರೆಯಿಡುತ್ತಾರೆ.

3 ಜನನಾಯಕರು ನೀರು ತರುವದಕ್ಕಾಗಿ ತಮ್ಮ ಸೇವಕರನ್ನು ಕಳುಹಿಸುತ್ತಾರೆ. ಆ ಸೇವಕರು ನೀರಿರುವ ಸ್ಥಳಗಳಿಗೆ ಹೋಗುತ್ತಾರೆ. ಆದರೆ ಅಲ್ಲಿ ಅವರಿಗೆ ನೀರು ಸಿಕ್ಕುವದಿಲ್ಲ. ಸೇವಕರು ಬರೀ ಪಾತ್ರೆಗಳನ್ನು ತೆಗೆದುಕೊಂಡು ಹಿಂದಿರುಗಿ ಬರು ತ್ತಾರೆ. ಅವರು ನಾಚಿಕೆ ಪಟ್ಟುಕೊಳ್ಳುತ್ತಾರೆ ಮತ್ತು ಪೇಚಾಡುತ್ತಾರೆ. ಅವರು ನಾಚಿಕೆಯಿಂದ ತಮ್ಮ ಮುಖಗಳನ್ನು ಮುಚ್ಚಿಕೊಳ್ಳುತ್ತಾರೆ.

4 ಭೂಮಿಗೆ ಮಳೆ ಬೀಳುವದಿಲ್ಲ. ಯಾರೂ ಬಿತ್ತನೆ ಗಾಗಿ ಭೂಮಿಯನ್ನು ಉಳುವದಿಲ್ಲ. ರೈತರು ಎದೆ ಗುಂದುತ್ತಾರೆ. ಅವರು ನಾಚಿಕೆಯಿಂದ ತಮ್ಮ ಮುಖಗಳನ್ನು ಮುಚ್ಚಿಕೊಳ್ಳುತ್ತಾರೆ.

5 ಕಾಡಿನಲ್ಲಿ ಹುಲ್ಲು ಇಲ್ಲದ ಕಾರಣ ಜಿಂಕೆಯು ತನ್ನ ಮರಿಯನ್ನು ಬಿಟ್ಟುಹೋಗುವದು.

6 ಕಾಡುಕತ್ತೆಗಳು ಬೋಳುಬೆಟ್ಟಗಳ ಮೇಲೆ ನಿಂತು ನರಿಗಳಂತೆ* ಗಾಳಿಯನ್ನು ಮೂಸುತ್ತವೆ. ಆದರೆ ಅವುಗಳಿಗೆ ಆಹಾರ ಕಾಣಿಸುವದಿಲ್ಲ. ಏಕೆಂದರೆ ತಿನ್ನಬಹುದಾದ ಸಸಿಗಳು ಬೆಳೆದಿಲ್ಲ.’’

7 ‘‘ಯೆಹೋವನೇ, ಅದು ನಮ್ಮ ಪಾಪಗಳ ಫಲ ವೆಂಬುದು ನಮಗೆ ತಿಳಿದಿದೆ. ನಮ್ಮ ಪಾಪಗ ಳಿಂದಾಗಿ ನಾವು ಈಗ ತೊಂದರೆಗಳನ್ನು ಅನುಭವಿ ಸುತ್ತಿದ್ದೇವೆ. ಯೆಹೋವನೇ, ನಿನ್ನ ಒಳ್ಳೆಯ ಹೆಸರಿ ಗಾಗಿ ನಮಗೇನಾದರೂ ಸಹಾಯಮಾಡು. ನಾವು ನಿನ್ನನ್ನು ಅನೇಕ ಸಲ ತ್ಯಜಿಸಿದ್ದೇವೆಂದು ಒಪ್ಪಿ ಕೊಳ್ಳುತ್ತೇವೆ. ನಾವು ನಿನ್ನ ವಿರುದ್ಧ ಪಾಪ ಮಾಡಿದ್ದೇವೆ.

8 ಯೆಹೋವನೇ, ನೀನು ಇಸ್ರೇಲರ ಆಶಾಕಿರಣ, ಕಷ್ಟಕಾಲದಲ್ಲಿ ಇಸ್ರೇಲನ್ನು ನೀನು ಕಾಪಾಡುವೆ. ಆದರೆ ಈಗ ನೀನು ಈ ದೇಶದಲ್ಲಿ ಪರ ದೇಶಿಯಂತೆ ಕಾಣುವೆ. ಕೇವಲ ಒಂದು ರಾತ್ರಿ ಮಾತ್ರ ಉಳಿಯುವ ಪ್ರಯಾಣಿಕನಂತೆ ಕಾಣುವೆ.

9 ನೀನು ಸ್ತಬ್ಧನಾಗಿರುವೆ; ಯಾರನ್ನೂ ರಕ್ಷಿಸಲಾಗದ ಸೈನಿಕನಂತಾಗಿರುವೆ. ಯೆಹೋವನೇ, ನೀನಾ ದರೂ ನಮ್ಮ ಜೊತೆಯಲ್ಲಿರುವೆ. ನಾವು ನಿನ್ನ ಹೆಸರಿ ನವರಾಗಿದ್ದೇವೆ. ಆದುದರಿಂದ ನಮ್ಮನ್ನು ಕೈಬಿಡ ಬೇಡ.’’

10 ಯೆಹೂದದ ಜನರ ಬಗ್ಗೆ ಯೆಹೋವನು ಹೀಗೆ
ಹೇಳುತ್ತಾನೆ: ‘‘ಯೆಹೂದದ ಜನರು ನನ್ನಿಂದ ದೂರ
ವಾಗಲು ಮನಃಪೂರ್ವಕವಾಗಿ ಇಚ್ಛಿಸುತ್ತಾರೆ. ಅವರು
ಮೊದಲಿಂದಲೂ ಹೀಗೆ ಮಾಡುತ್ತಲೇ ಇದ್ದಾರೆ. ಆದ್ದ
ರಿಂದ ಈಗ ಯೆಹೋವನು ಅವರನ್ನು ಸ್ವೀಕರಿಸುವದಿಲ್ಲ.
ಆತನು ಅವರ ದುಷ್ಕೃತ್ಯಗಳನ್ನು ಜ್ಞಾಪಕಕ್ಕೆ ತಂದುಕೊಂಡು
ಅವರ ಪಾಪಗಳಿಗಾಗಿ ಅವರನ್ನು ದಂಡಿಸುತ್ತಾನೆ.’’
11 ಆಗ ಯೆಹೋವನು, ‘‘ಯೆರೆಮೀಯನೇ, ಯೆಹೂ
ದದ ಜನರ ಒಳಿತಿಗಾಗಿ ಪ್ರಾರ್ಥಿಸಬೇಡ. 12 ಯೆಹೂದದ
ಜನರು ಉಪವಾಸ ವ್ರತವನ್ನು ಕೈಕೊಳ್ಳಬಹುದು ಮತ್ತು

**ನರಿಗಳಂತೆ** ನಿಜವಾದ ನರಿಗಳಲ್ಲ. ನಾಯಿ ಜಾತಿಗೆ ಸೇರಿದ ಕಾಡು ಪ್ರಾಣಿ.

ನನಗೆ ಪ್ರಾರ್ಥನೆ ಮಾಡಬಹುದು. ಆದರೆ ನಾನು ಅವರ
ಪ್ರಾರ್ಥನೆಗಳನ್ನು ಕೇಳುವದಿಲ್ಲ. ಅವರು ನನಗೆ
ಸರ್ವಾಂಗಹೋಮಗಳನ್ನು ಮತ್ತು ಧಾನ್ಯನೈವೇದ್ಯಗಳನ್ನು
ಅರ್ಪಿಸಿದರೂ ಸಹ ನಾನು ಅವರನ್ನು ಸ್ವೀಕರಿಸುವದಿಲ್ಲ.
ನಾನು ಯುದ್ಧದಿಂದ ಯೆಹೂದದ ಜನರನ್ನು ನಾಶ
ಮಾಡುತ್ತೇನೆ. ನಾನು ಅವರ ಆಹಾರವನ್ನು ಕಿತ್ತುಕೊಳ್ಳು
ತ್ತೇನೆ; ಯೆಹೂದದ ಜನರು ಉಪವಾಸದಿಂದ ಸಾಯು
ವಂತೆ ಮಾಡುತ್ತೇನೆ. ನಾನು ಅವರನ್ನು ಭಯಂಕರವಾದ
ವ್ಯಾಧಿಗಳಿಂದ ನಾಶಮಾಡುತ್ತೇನೆ'' ಎಂದು ಹೇಳಿದನು.
[13]ಆಗ ನಾನು ಯೆಹೋವನಿಗೆ, ''ನನ್ನ ಒಡೆಯನಾದ
ಯೆಹೋವನೇ, ಪ್ರವಾದಿಗಳು ಜನರಿಗೆ ಬೇರೆಯದನ್ನೇ
ಹೇಳಿದರು. ಅವರು ಯೆಹೂದದ ಜನರಿಗೆ, 'ನೀವು ಶತ್ರು
ವಿನ ಖಡ್ಗಕ್ಕೆ ತುತ್ತಾಗುವದಿಲ್ಲ. ನೀವೆಂದಿಗೂ ಹಸಿವಿನಿಂದ
ಬಳಲುವದಿಲ್ಲ, ಯೆಹೋವನು ಈ ದೇಶದಲ್ಲಿ ನಿಮಗೆ
ನೆಮ್ಮದಿಯನ್ನು ದಯಪಾಲಿಸುವನು' ಎಂದು ಹೇಳು
ತ್ತಿದ್ದರು''' ಎಂದೆನು.
[14]ಆಗ ಯೆಹೋವನು ನನಗೆ, ''ಯೆರೆಮೀಯನೇ, ಆ
ಪ್ರವಾದಿಗಳು ನನ್ನ ಹೆಸರಿನಿಂದ ಸುಳ್ಳುಬೋಧನೆ ಮಾಡು
ತ್ತಾರೆ. ನಾನು ಆ ಪ್ರವಾದಿಗಳನ್ನು ಕಳುಹಿಸಲಿಲ್ಲ. ಅವರಿಗೆ
ನಾನು ಯಾವ ಅಪ್ಪಣೆಯನ್ನೂ ಕೊಟ್ಟಿಲ್ಲ, ಅವರೊಂದಿಗೆ
ನಾನು ಮಾತನ್ನೂ ಆಡಿಲ್ಲ. ಆ ಪ್ರವಾದಿಗಳು ಸುಳ್ಳು
ದರ್ಶನಗಳನ್ನೂ ನಿಷ್ಪ್ರಯೋಜಕವಾದ ಮಾಟಮಂತ್ರ
ಗಳನ್ನೂ ಸ್ವಕಲ್ಪಿತ ವಿಚಾರಗಳನ್ನೂ ಬೋಧಿಸುತ್ತಿದ್ದಾರೆ.
[15]ನನ್ನ ಹೆಸರಿನಲ್ಲಿ ಬೋಧನೆ ಮಾಡುತ್ತಿರುವ ಈ
ಪ್ರವಾದಿಗಳ ಬಗ್ಗೆ ನಾನು ಹೇಳುವದು ಇಷ್ಟೇ. ನಾನು ಆ
ಪ್ರವಾದಿಗಳನ್ನು ಕಳುಹಿಸಿಲ್ಲ. ಆ ಪ್ರವಾದಿಗಳು 'ಶತ್ರುಗಳು
ಖಡ್ಗಧಾರಿಗಳಾಗಿ ಎಂದಿಗೂ ಈ ದೇಶದ ಮೇಲೆ
ಧಾಳಿಮಾಡುವದಿಲ್ಲ. ಈ ದೇಶದಲ್ಲಿ ಎಂದೂ ಕ್ಷಾಮ
ಕಾಣಿಸಿಕೊಳ್ಳುವದಿಲ್ಲ' ಎಂದು ಹೇಳಿದ್ದಾರೆ . ಆದರೆ ಆ
ಪ್ರವಾದಿಗಳು ಹಸಿವಿನ ತಾಪದಿಂದ ಸಾಯುತ್ತಾರೆ ಮತ್ತು
ಶತ್ರುವಿನ ಖಡ್ಗ ಅವರನ್ನು ಕೊಲ್ಲುತ್ತದೆ. [16]ಯಾರಿಗೆ
ಪ್ರವಾದಿಗಳು ಬೋಧನೆ ಮಾಡಿದ್ದರೋ ಅವರನ್ನು ಬೀದಿ
ಗಳಲ್ಲಿ ಎಸೆಯಲಾಗುವದು. ಆ ಜನರು ಹಸಿವಿನಿಂದ
ಮತ್ತು ಶತ್ರುಗಳ ಖಡ್ಗಗಳಿಂದ ಮಡಿಯುವರು. ಆ ಜನ
ರನ್ನೂ ಅವರ ಹೆಂಡತಿಯರನ್ನೂ ಮಕ್ಕಳನ್ನೂ ಹೂಳುವ
ದಕ್ಕೆ ಯಾರೂ ಇರುವದಿಲ್ಲ. ನಾನು ಅವರನ್ನು
ದಂಡಿಸುತ್ತೇನೆ.'''

17 ''ಯೆರೆಮೀಯನೇ, ಯೆಹೂದದ ಜನರಿಗೆ ಈ
ಸಂದೇಶವನ್ನು ಹೇಳು: 'ನನ್ನ ಕಣ್ಣುಗಳಲ್ಲಿ
ಕಣ್ಣೀರು ತುಂಬಿಕೊಂಡಿದೆ. ನಾನು ನಿರಂತರವಾಗಿ
ಹಗಲಿರುಳು ಅಳುವೆನು. ನಾನು ನನ್ನ ಕನ್ಯೆಯಾದ
ಮಗಳಿಗಾಗಿ* ಅಳುವೆನು. ನಾನು ನನ್ನ ಜನರಿ
ಗಾಗಿ ಅಳುವೆನು. ಏಕೆಂದರೆ ಯಾರೋ ಒಬ್ಬರು
ಅವರನ್ನು ಹೊಡೆದು ಸದೆಬಡಿದಿದ್ದಾರೆ, ಅವರಿಗೆ
ಬಹಳ ಗಾಯಗಳಾಗಿವೆ.
18 ನಾನು ನಗರಗಳ ಹೊರಗಡೆ ಹೋದರೆ ಖಡ್ಗಗ
ಳಿಗೆ ಆಹುತಿಯಾಗಿ ಸತ್ತವರು ನನ್ನ ಕಣ್ಣಿಗೆ ಬೀಳು
ತ್ತಾರೆ. ನಾನು ನಗರಗಳಲ್ಲಿ ಹೋದರೆ ಕ್ಷಾಮ
ದಿಂದ ಬಳಲುವ ಜನರು ನನ್ನ ಕಣ್ಣಿಗೆ ಬೀಳುತ್ತಾರೆ.
ಅವರಿಗೆ ತಿನ್ನಲು ಅನ್ನವಿಲ್ಲ. ಯಾಜಕರನ್ನು ಮತ್ತು
ಪ್ರವಾದಿಗಳನ್ನು ಪರದೇಶಕ್ಕೆ ತೆಗೆದುಕೊಂಡು
ಹೋಗಲಾಗಿದೆ.'''
19 ''ಯೆಹೋವನೇ, ನೀನು ಯೆಹೂದ ಜನಾಂಗ
ವನ್ನು ಸಂಪೂರ್ಣವಾಗಿ ತಿರಸ್ಕರಿಸಿರುವೆಯಾ?
ಯೆಹೋವನೇ, ನೀನು ಚೀಯೋನನ್ನು ದ್ವೇಷಿಸು
ವೆಯಾ? ನಾವು ಪುನಃ ಗುಣಹೊಂದಲಾರದ
ಹಾಗೆ ನಮ್ಮನ್ನು ಹೊಡೆದು ಗಾಯಗೊಳಿಸಿರುವೆ
ಯಲ್ಲ. ನೀನು ಹೀಗೇಕೆ ಮಾಡಿದೆ? ನಾವು ನೆಮ್ಮದಿ
ಯನ್ನು ನಿರೀಕ್ಷಿಸಿದೆವು, ಆದರೆ ಒಳ್ಳೆಯದೇನೂ
ಆಗಲಿಲ್ಲ. ನಾವು ಕ್ಷೇಮವನ್ನು ಎದುರುನೋಡುತ್ತಿ
ದ್ದೆವು. ಆದರೆ ಕೇವಲ ಭಯ ನಮ್ಮೆದುರಿಗೆ
ಬಂದಿತು.
20 ಯೆಹೋವನೇ, ನಾವು ಬಹಳ ಕೆಟ್ಟ ಜನರೆಂಬುದು
ನಮಗೆ ಗೊತ್ತು. ನಮ್ಮ ಪೂರ್ವಿಕರು ದುಷ್ಕೃತ್ಯ
ಗಳನ್ನು ಮಾಡಿದರೆಂಬುದನ್ನು ನಾವು ಬಲ್ಲೆವು.
ಹೌದು, ನಾವು ನಿನ್ನ ವಿರುದ್ಧ ಪಾಪ ಮಾಡಿದೆವು.
21 ಯೆಹೋವನೇ, ನಿನ್ನ ಹೆಸರಿನ ಒಳ್ಳೆಯತನ ಉಳಿಸಿ
ಕೊಳ್ಳುವದಕ್ಕಾದರೂ ನಮ್ಮನ್ನು ದೂರತಳ್ಳಬೇಡ.
ನಿನ್ನ ಮಹಿಮೆಯು ಸಿಂಹಾಸನದ ಗೌರವವನ್ನು
ಕುಂದಿಸಬೇಡ. ನೀನು ನಮ್ಮೊಡನೆ ಮಾಡಿಕೊಂಡ
ಒಡಂಬಡಿಕೆಯನ್ನು ಸ್ಮರಿಸಿಕೋ. ಆ ಒಡಂಬಡಿಕೆ
ಯನ್ನು ಮುರಿಯಬೇಡ.
22 ಅನ್ಯರ ವಿಗ್ರಹಗಳಿಗೆ ಮಳೆ ಸುರಿಸುವ ಸಾಮರ್ಥ್ಯ
ವಿಲ್ಲ. ಆಕಾಶಕ್ಕೆ ಮಳೆಯನ್ನು ಸುರಿಸುವ ಸಾಮರ್ಥ್ಯ
ವಿಲ್ಲ. ನೀನೊಬ್ಬನೇ ನಮ್ಮ ಆಶಾಕೇಂದ್ರ. ನೀನೇ
ಈ ಎಲ್ಲವುಗಳನ್ನು ಸೃಷ್ಟಿಸಿದವನು.''

15 ಯೆಹೋವನು ನನಗೆ ಹೀಗೆ ಹೇಳಿದನು:
''ಯೆರೆಮೀಯನೇ, ಯೆಹೂದದ ಜನರಿಗಾಗಿ
ಪ್ರಾರ್ಥಿಸಿ, ಬೇಡಿಕೊಳ್ಳಲು ಮೋಶೆಯೂ ಸಮುವೇ
ಲನೂ ಇದ್ದಿದ್ದರೂ ನಾನು ಈ ಜನರ ಬಗ್ಗೆ ಮರುಕಪಡುತ್ತಿ
ರಲಿಲ್ಲ. ಯೆಹೂದದ ಜನರನ್ನು ನನ್ನಿಂದ ದೂರ

---

* **ಕನ್ಯೆಯಾದ ಮಗಳು** ಇದು ಜೆರುಸಲೇಮಿನ ಇನ್ನೊಂದು ಹೆಸರು.

ಕಳುಹಿಸು. ಅವರಿಗೆ ಹೋಗಲು ಹೇಳು. 2 ‘ನಾವು ಎಲ್ಲಿಗೆ
ಹೋಗಬೇಕು’ ಎಂದು ಅವರು ಕೇಳಬಹುದು.
‘ಯೆಹೋವನು ಹೀಗೆ ಹೇಳಿದ್ದಾನೆ’ ಎಂದು ನೀನು
ಅವರಿಗೆ ಹೇಳು.

‘ಕೆಲವು ಜನರು ಮರಣಹೊಂದಬೇಕೆಂದು ನಾನು ಗೊತ್ತುಮಾಡಿದ್ದೇನೆ. ಅವರು ಮರಣ ಹೊಂದುತ್ತಾರೆ. ಕೆಲವು ಜನರು ಖಡ್ಗಗಳಿಂದ ಕೊಲ್ಲಲ್ಪಡಬೇಕೆಂದು ನಾನು ಗೊತ್ತುಮಾಡಿದ್ದೇನೆ. ಅವರು ಖಡ್ಗಗಳಿಗೆ ಬಲಿಯಾಗುತ್ತಾರೆ. ಕೆಲವು ಜನರು ಹೊಟ್ಟೆಗೆ ಅನ್ನವಿಲ್ಲದೆ ಸಾಯಬೇಕು ಎಂದು ನಾನು ಗೊತ್ತುಮಾಡಿದ್ದೇನೆ. ಅವರು ಹಸಿವಿನಿಂದ ಸಾಯುತ್ತಾರೆ. ಕೆಲವು ಜನರನ್ನು ಶತ್ರುಗಳು ಸೆರೆಹಿಡಿದು ಪರದೇಶಕ್ಕೆ ತೆಗೆದುಕೊಂಡು ಹೋಗಲಿ ಎಂದು ಗೊತ್ತುಮಾಡಿದ್ದೇನೆ. ಅವರು ಪರದೇಶದಲ್ಲಿ ಸೆರೆಯಾಳುಗಳಾಗಿ ಇರುವರು.

3 ನಾನು ಅವರ ವಿರುದ್ಧ ನಾಲ್ಕು ರೀತಿಯ ವಿನಾಶಕರನ್ನು ಕಳುಹಿಸುತ್ತೇನೆ.’ ಇದು ಯೆಹೋವನ ನುಡಿ. ‘ಅವರನ್ನು ಕೊಲೆಮಾಡಲು ಖಡ್ಗಧಾರಿಗಳಾದ ಶತ್ರುಗಳನ್ನು ಕಳುಹಿಸುತ್ತೇನೆ. ಅವರ ದೇಹಗಳನ್ನು ಎಳೆದುಕೊಂಡು ಹೋಗುವದಕ್ಕಾಗಿ ನಾಯಿಗಳನ್ನು ಕಳುಹಿಸುತ್ತೇನೆ. ಅವರ ದೇಹಗಳನ್ನು ತಿನ್ನಲು ಮತ್ತು ನಾಶಮಾಡಲು ಗಾಳಿಯಲ್ಲಿ ಹಾರಾಡುವ ಪಕ್ಷಿಗಳನ್ನೂ ಮತ್ತು ಕಾಡು ಪ್ರಾಣಿಗಳನ್ನೂ ಕಳುಹಿಸುತ್ತೇನೆ.

4 ಯೆಹೂದದ ಜನರು ಭೂಲೋಕದ ಎಲ್ಲಾ ಜನರಿಗೆ ಒಂದು ಭಯಾನಕವಾದ ಉದಾಹರಣೆಯಾಗುವಂತೆ ಮಾಡುತ್ತೇನೆ. ಮನಸ್ಸೆಯು* ಜೆರುಸಲೇಮಿನಲ್ಲಿ ಮಾಡಿದ ಪಾಪಕಾರ್ಯಗಳ ಫಲವಾಗಿ ನಾನು ಯೆಹೂದದಲ್ಲಿ ಹೀಗೆ ಮಾಡುತ್ತೇನೆ. ಮನಸ್ಸೆಯು ರಾಜನಾದ ಹಿಜ್ಕೀಯನ ಮಗನಾಗಿದ್ದನು. ಮನಸ್ಸೆಯು ಯೆಹೂದದ ರಾಜನಾಗಿದ್ದನು.’

5 ‘‘ಜೆರುಸಲೇಮ್ ನಗರವೇ ನಿನಗಾಗಿ ಯಾರೂ ವ್ಯಥೆಪಡುವದಿಲ್ಲ. ನಿನಗಾಗಿ ದುಃಖ ಪಡುವುದಿಲ್ಲ ಮತ್ತು ಅಳುವುದಿಲ್ಲ. ಯಾರೂ ತಮ್ಮ ದಿನನಿತ್ಯದ ಕೆಲಸಕಾರ್ಯಗಳನ್ನು ಬಿಟ್ಟು ನಿನ್ನ ಯೋಗಕ್ಷೇಮವನ್ನು ವಿಚಾರಿಸಲು ಬರುವುದಿಲ್ಲ.

6 ಜೆರುಸಲೇಮೇ, ನೀನು ನನ್ನನ್ನು ತ್ಯಜಿಸಿದೆ’’ ಇದು ಯೆಹೋವನ ನುಡಿ. ‘‘ಮತ್ತೆಮತ್ತೆ ನೀನು ನನ್ನನ್ನು ತ್ಯಜಿಸಿದೆ. ಆದುದರಿಂದ ನಾನು ನಿನ್ನನ್ನು ದಂಡಿಸುತ್ತೇನೆ ಮತ್ತು ನಾಶಮಾಡುತ್ತೇನೆ. ನಿನಗೆ ಸಲ್ಲಬೇಕಾದ ಶಿಕ್ಷೆಯನ್ನು ಪುನಃ ತಡೆಹಿಡಿದು ನಾನು ದಣಿದಿದ್ದೇನೆ.

7 ಯೆಹೂದದ ಜನರನ್ನು ನಾನು ಕವಲುಗೋಲಿನಿಂದ ವಿಂಗಡಿಸಿ ದೇಶದ ಎಲ್ಲಾ ನಗರಗಳ ದ್ವಾರದಲ್ಲಿ ಚಮರಿಸುತ್ತೇನೆ. ನನ್ನ ಜನರು ಬದಲಾಗಲಿಲ್ಲ. ನಾನು ಅವರನ್ನು ನಾಶಮಾಡುತ್ತೇನೆ. ನಾನು ಅವರ ಮಕ್ಕಳನ್ನು ಕಸಿದುಕೊಳ್ಳುತ್ತೇನೆ.

8 ಅನೇಕ ಹೆಂಗಸರು ತಮ್ಮ ಗಂಡಂದಿರನ್ನು ಕಳೆದುಕೊಳ್ಳುವರು. ಸಮುದ್ರದಡದಲ್ಲಿದ್ದ ಮರಳುಕಣಗಳಿಗಿಂತ ವಿಧವೆಯರ ಸಂಖ್ಯೆ ಹೆಚ್ಚಾಗುವುದು. ಮಧ್ಯಾಹ್ನದಲ್ಲಿಯೇ ನಾನು ಘಾತುಕನನ್ನು ತರುವೆನು. ಆ ಘಾತುಕನು ಯೆಹೂದದ ತಾಯಂದಿರ ಮೇಲೆರಗುವನು. ನಾನು ಯೆಹೂದದ ಜನರಿಗೆ ನೋವನ್ನು ಮತ್ತು ಭಯವನ್ನು ತರುವೆನು; ಅತೀ ಶೀಘ್ರದಲ್ಲಿಯೇ ಹೀಗಾಗುವಂತೆ ಮಾಡುವೆನು.

9 ಶತ್ರುಗಳು ಖಡ್ಗಧಾರಿಗಳಾಗಿ ಬಂದು ಜನರ ಮೇಲೆರಗಿ ಕೊಲೆಮಾಡುವರು. ಯೆಹೂದದಲ್ಲಿ ಜೀವಂತ ಉಳಿದವರನ್ನು ಅವರು ವಧಿಸುವರು. ಒಬ್ಬ ಸ್ತ್ರೀಗೆ ಏಳು ಜನ ಮಕ್ಕಳಿದ್ದರೂ ಅವರೆಲ್ಲ ಸತ್ತುಹೋಗುವರು. ಅವಳು ಅತ್ತೂ ಅತ್ತೂ ಬಳಲಿ ಉಸಿರಾಡದಂತಾಗುವಳು. ಅವಳು ಕಳವಳ ಪಡುವಳು ಮತ್ತು ಗಾಬರಿಗೊಳ್ಳುವಳು. ಪ್ರಕಾಶಮಯವಾದ ದಿನವು ದುಃಖದ ನಿಮಿತ್ತ ಅವಳಿಗೆ ಕತ್ತಲಾಗುವುದು.’’

## ಯೆರೆಮೀಯನು ಪುನಃ ದೇವರಲ್ಲಿ ದೂರುತ್ತಾನೆ

10 ನನ್ನ ತಾಯಿ, ನೀನು ಜನ್ಮ ಕೊಟ್ಟಿದ್ದಕ್ಕಾಗಿ ನನಗೆ ದುಃಖವಾಗುತ್ತದೆ. ಯೆರೆಮೀಯನಾದ ನಾನು ಇಡೀ ದೇಶದ ಜನರ ವಿರುದ್ಧವಾಗಿ ವಾದಿಸುತ್ತಾ ನಿಂದಿಸುತ್ತಾ ಇರುವೆ. ನಾನು ಯಾರಿಗೂ ಸಾಲವನ್ನು ಕೊಟ್ಟಿಲ್ಲ; ಸಾಲವನ್ನು ತೆಗೆದುಕೊಂಡಿಲ್ಲ. ಆದರೆ ಪ್ರತಿಯೊಬ್ಬರು ನನ್ನನ್ನು ಶಪಿಸುತ್ತಾರೆ.

11 ದೇವರೇ, ನಿಜವಾಗಿಯೂ ನಾನು ನಿನ್ನ ಸೇವೆಯನ್ನು ಚೆನ್ನಾಗಿ ಮಾಡಿದ್ದೇನೆ. ಕಷ್ಟದ ಕಾಲದಲ್ಲಿ ನನ್ನ ವೈರಿಗಳ ಬಗ್ಗೆ ನಾನು ನಿನ್ನಲ್ಲಿ ಪ್ರಾರ್ಥಿಸಿದ್ದೇನೆ.*

---

**ಮನಸ್ಸೆ** ಯೆಹೂದದ ಒಬ್ಬ ದುಷ್ಟ ರಾಜ. ಅವನು ಅನೇಕ ಸುಳ್ಳು ದೇವರುಗಳನ್ನು ಪೂಜಿಸಿದನು.

**ದೇವರೇ ... ಪ್ರಾರ್ಥಿಸಿದ್ದೇನೆ** ಇದನ್ನು ಈ ರೀತಿಯಲ್ಲಿಯೂ ಅನುವಾದಿಸಬಹುದು ‘‘ಪ್ರಭುವು, ‘ಇಕ್ಕಟ್ಟಿನಲ್ಲಿಯೂ ಆಪತ್ತಿನಲ್ಲಿಯೂ ನಿನ್ನ ಶತ್ರುಗಳು ನಿನ್ನನ್ನು ಬೇಡಿಕೊಳ್ಳುವಂತೆ ಮಾಡುವನು.’’

### ಯೆರೆಮೀಯನಿಗೆ ದೇವರ ಉತ್ತರ

12 ‘‘ಯೆರೆಮೀಯನೇ, ಕಬ್ಬಿಣದ ತುಂಡನ್ನು ಪುಡಿ
ಮಾಡಲು ಯಾರಿಗೂ ಸಾಧ್ಯವಿಲ್ಲವೆಂಬುದು
ನಿನಗೆ ಗೊತ್ತು. ಉತ್ತರದಿಂದ* ಬರುವವನು
ಕಬ್ಬಿಣದಂತಿದ್ದಾನೆ.
13 ಯೆಹೂದದ ಜನರಲ್ಲಿ ಅನೇಕ ಭಂಡಾರಗಳಿವೆ.
ಆ ಭಂಡಾರಗಳನ್ನು ನಾನು ಬೇರೆಯವರಿಗೆ
ಒಪ್ಪಿಸುತ್ತೇನೆ. ಬೇರೆಯವರು ಆ ಭಂಡಾರಗಳನ್ನು
ಹಣ ಕೊಟ್ಟು ತೆಗೆದುಕೊಳ್ಳಬೇಕಾಗಿಲ್ಲ. ನಾನು
ಅವರಿಗೆ ಅವುಗಳನ್ನು ಉಚಿತವಾಗಿ ಕೊಟ್ಟು
ಬಿಡುತ್ತೇನೆ. ಏಕೆಂದರೆ ಯೆಹೂದವು ಅನೇಕ
ಪಾಪಗಳನ್ನು ಮಾಡಿದೆ. ದೇಶದ ಪ್ರತಿ
ಯೊಂದು ಭಾಗದಲ್ಲಿಯೂ ಯೆಹೂದ ಪಾಪ
ಮಾಡಿದೆ.
14 ಯೆಹೂದದ ಜನಗಳೇ, ನಾನು ನಿಮ್ಮನ್ನು ಶತ್ರು
ಗಳಿಗೆ ದಾಸರನ್ನಾಗಿ ಮಾಡುವೆನು. ನೀವೆಂದೂ
ನೋಡದ ಪ್ರದೇಶದಲ್ಲಿ ದಾಸರಾಗಿರುವಿರಿ. ನನಗೆ
ಅತೀಕೋಪ ಬಂದಿದೆ. ನನ್ನ ಕೋಪವು
ಜ್ವಾಲೆಯಂತಿದೆ. ಆ ಜ್ವಾಲೆಯಿಂದ ನೀವು ಸುಟ್ಟು
ಹೋಗುವಿರಿ.’’
15 ಯೆಹೋವನೇ, ನನ್ನ ವಿಷಯ ನಿನಗೆ ಗೊತ್ತು.
ನನ್ನನ್ನು ಜ್ಞಾಪಕದಲ್ಲಿಟ್ಟುಕೊಂಡು ರಕ್ಷಿಸು.
ಜನರು ನನ್ನನ್ನು ತೊಂದರೆಗೀಡು ಮಾಡುತ್ತಿ
ದ್ದಾರೆ. ಅವರಿಗೆ ತಕ್ಕ ಶಿಕ್ಷೆಯನ್ನು ಕೊಡು. ನೀನು
ಅವರೊಂದಿಗೆ ಬಹಳ ತಾಳ್ಮೆಯಿಂದ ವರ್ತಿಸುತ್ತಿ
ರುವೆ. ಅವರೊಂದಿಗೆ ತಾಳ್ಮೆಯಿಂದ ಇದ್ದು ನನ್ನನ್ನು
ಹಾಳುಮಾಡಬೇಡ. ನನ್ನ ಬಗ್ಗೆ ವಿಚಾರ ಮಾಡು.
ಯೆಹೋವನೇ, ನಿನ್ನ ಸಲುವಾಗಿ ನಾನು ಎಷ್ಟು
ಕಷ್ಟಪಡುತ್ತಿದ್ದೇನೆ ಎಂಬುದನ್ನು ಯೋಚಿಸು.
16 ನಿನ್ನ ಸಂದೇಶ ನನಗೆ ಬಂದಿತು. ನಾನು ನಿನ್ನ ಮಾತು
ಗಳನ್ನು ಆಹಾರವನ್ನಾಗಿ ಮಾಡಿಕೊಂಡೆ. ನಿನ್ನ
ಸಂದೇಶದಿಂದ ನನಗೆ ತುಂಬಾ ಸಂತೋಷ
ವಾಯಿತು. ನಿನ್ನನ್ನು ಹೆಸರಿಡಿದು ಕರೆಯುವುದ
ರಿಂದ ನನಗೆ ಹೆಚ್ಚಿನ ಸಂತೋಷವಾಗಿತ್ತು. ನಿನ್ನ
ಹೆಸರು ಸರ್ವಶಕ್ತನಾದ ಯೆಹೋವನು.
17 ತಮಾಷೆ ಮಾಡಿಕೊಂಡು ನಗುತ್ತಲಿದ್ದ ಗುಂಪಿನಲ್ಲಿ
ನಾನೆಂದೂ ಸೇರಲಿಲ್ಲ. ನನ್ನ ಮೇಲೆ ಆದ ನಿನ್ನ
ಪ್ರಭಾವದಿಂದ ನಾನೊಬ್ಬನೇ ಕುಳಿತುಕೊಂಡಿರು
ತ್ತಿದ್ದೆ. ನನ್ನ ಸುತ್ತಮುತ್ತಲಿನ ದುಷ್ಟತನದ ಮೇಲೆ
ನನ್ನಲ್ಲಿ ರೋಷವನ್ನು ತುಂಬಿದೆ.
18 ಹೀಗಿದ್ದರೂ ನನಗೇಕೆ ವ್ಯಥೆ ಉಂಟಾಗುತ್ತಿದೆ?
ಎಂಬುದು ನನಗೆ ಅರ್ಥವಾಗುತ್ತಿಲ್ಲ. ನನ್ನ ಗಾಯ
ಏಕೆ ಗುಣವಾಗುತ್ತಿಲ್ಲ.? ಏಕೆ ವಾಸಿಯಾಗುತ್ತಿಲ್ಲ?
ಎಂಬುದು ನನಗೆ ತಿಳಿಯದು. ಯೆಹೋವನೇ
ನಿನ್ನಲ್ಲಿ ಬದಲಾವಣೆಯಾಗಿದೆ ಎಂದು ನನಗೆ
ಅನಿಸುತ್ತಿದೆ. ನೀನು ಪ್ರವಾಹ ನಿಂತುಹೋದ
ನೀರಿನ ಬುಗ್ಗೆಯಂತಿರುವೆ.
19 ಆಗ ಯೆಹೋವನು ಹೇಳಿದನು: ‘‘ಯೆರೆಮೀ
ಯನೇ, ನೀನು ಬದಲಾವಣೆ ಹೊಂದಿ ನನ್ನಲ್ಲಿಗೆ
ಬಂದರೆ ನಾನು ನಿನ್ನನ್ನು ದಂಡಿಸುವದಿಲ್ಲ. ನೀನು
ಬದಲಾವಣೆ ಹೊಂದಿ ನನ್ನಲ್ಲಿಗೆ ಬಂದರೆ ನೀನು
ನನ್ನ ಸೇವೆಮಾಡಬಹುದು. ಹುರುಳಿಲ್ಲದ ಮಾತು
ಗಳನ್ನು ಬಿಟ್ಟು ಮುಖ್ಯವಾದ ವಿಷಯಗಳನ್ನು
ಕುರಿತು ಮಾತನಾಡುವದಾದರೆ ನೀನು ನನ್ನ ಪರ
ವಾಗಿ ಮಾತನಾಡಬಹುದು. ಯೆರೆಮೀಯನೇ,
ಯೆಹೂದದ ಜನರು ಬದಲಾವಣೆ ಹೊಂದಿ
ನಿನ್ನಲ್ಲಿಗೆ ಬರಬೇಕು. ಆದರೆ ನೀನು ಬದಲಾವಣೆ
ಹೊಂದಿ ಅವರಂತೆ ಆಗಬಾರದು.
20 ನಾನು ನಿನ್ನನ್ನು ಬಲಶಾಲಿಯನ್ನಾಗಿ ಮಾಡುತ್ತೇನೆ.
ನೀನು ತಾಮ್ರದ ಗೋಡೆಯಂತೆ ಗಟ್ಟಿಯಾಗಿರುವೆ
ಎಂದು ಆ ಜನರು ತಿಳಿದುಕೊಳ್ಳುವರು. ಯೆಹೂ
ದದ ಜನರು ನಿನ್ನ ವಿರುದ್ಧ ಹೋರಾಡುವರು.
ಆದರೆ ಅವರು ನಿನ್ನನ್ನು ಸೋಲಿಸಲಾರರು.
ಏಕೆಂದರೆ ನಾನೇ ನಿನ್ನ ಜೊತೆಯಲ್ಲಿ ಇದ್ದೇನೆ.
ನಾನು ನಿನಗೆ ಸಹಾಯಮಾಡುತ್ತೇನೆ ಮತ್ತು ನಾನು
ನಿನ್ನನ್ನು ರಕ್ಷಿಸುತ್ತೇನೆ’’ ಇದು ಯೆಹೋವನಿಂದ
ಬಂದ ನುಡಿ.
21 ‘‘ನಾನು ನಿನ್ನನ್ನು ಆ ದುಷ್ಟ ಜನರಿಂದ ರಕ್ಷಿಸುತ್ತೇನೆ.
ಆ ಜನರು ನಿನ್ನನ್ನು ಬೆದರಿಸುತ್ತಾರೆ. ಆದರೆ ನಾನು
ನಿನ್ನನ್ನು ಆ ಜನರಿಂದ ರಕ್ಷಿಸುತ್ತೇನೆ.’’

### ವಿಪತ್ತಿನ ದಿನ

16 ನನಗೆ ಯೆಹೋವನಿಂದ ಈ ಸಂದೇಶ ಬಂದಿತು:
2 ‘‘ಯೆರೆಮೀಯನೇ, ನೀನು ಮದುವೆ ಮಾಡಿ
ಕೊಳ್ಳಬಾರದು. ನೀನು ಇಲ್ಲಿ ಮಕ್ಕಳನ್ನು ಹೊಂದ
ಬಾರದು.’’ 3 ಯೆಹೂದ ಪ್ರದೇಶದಲ್ಲಿ ಹುಟ್ಟಿದ ಮಕ್ಕಳ
ಕುರಿತಾಗಿಯೂ ಅದರ ತಂದೆತಾಯಿಗಳ ಕುರಿತಾಗಿಯೂ
ಯೆಹೋವನು ಹೀಗೆ ಹೇಳುತ್ತಾನೆ. 4 ‘‘ಅವರು ಒಂದು
ಭಯಾನಕವಾದ ರೀತಿಯಲ್ಲಿ ಮರಣ ಹೊಂದುತ್ತಾರೆ.
ಅವರನ್ನು ಯಾರೂ ಹೂಳುವದಿಲ್ಲ. ಅವರ ದೇಹಗಳು
ಭೂಮಿಯ ಮೇಲೆ ಗೊಬ್ಬರದಂತೆ ಬಿದ್ದಿರುತ್ತವೆ. ಅವರು
ವೈರಿಗಳ ಖಡ್ಗಗಳಿಂದ ಮಡಿಯುವರು. ಅವರು

---

**ಉತ್ತರ** ಯೆಹೂದದ ಮೇಲೆ ಆಕ್ರಮಣ ಮಾಡಲು ಉತ್ತರ ದಿಕ್ಕಿನಿಂದ
ಬರುವ ಬಾಬಿಲೋನಿನ ಸೈನ್ಯವನ್ನು ಇದು ಸೂಚಿಸುತ್ತದೆ.

ಅನ್ನವಿಲ್ಲದೆ ಸಾಯುವರು. ಅವರ ಶವಗಳು ಆಕಾಶದ
ಪಕ್ಷಿಗಳಿಗೂ ಭೂಮಿಯ ಮೇಲಿನ ಕಾಡು ಪ್ರಾಣಿಗಳಿಗೂ
ಆಹಾರವಾಗುವವು.''
5ಯೆಹೋವನು ಹೇಳಿದನು: ''ಯೆರೆಮೀಯನೇ,
ಜನರು ಶವಸಂಸ್ಕಾರದ ಊಟ. ಮಾಡುತ್ತಿರುವ ಮನೆ
ಯೊಳಗೆ ನೀನು ಹೋಗಬೇಡ. ಸತ್ತವರ ಸಂಗಡ ಅಳು
ವದಕ್ಕಾಗಲಿ ಅಥವಾ ನಿನ್ನ ದುಃಖವನ್ನು ಸೂಚಿಸುವದ
ಕ್ಕಾಗಲಿ, ನೀನು ಅಲ್ಲಿಗೆ ಹೋಗಬೇಡ. ಏಕೆಂದರೆ ನಾನು
ಅವರ ಮೇಲಿನ ನನ್ನ ಕೃಪೆಯನ್ನು ಹಿಂತೆಗೆದು ಕೊಂಡಿ
ದ್ದೇನೆ. ನಾನು ಯೆಹೂದದ ಈ ಜನರಿಗೆ ಕರುಣೆಯನ್ನು
ತೋರಿಸುವದಿಲ್ಲ . ನಾನು ಅವರಿಗೋಸ್ಕರ ವ್ಯಥೆಪಡುವ
ದಿಲ್ಲ.'' ಇದು ಯೆಹೋವನ ನುಡಿ.
6''ಯೆಹೂದದ ಪ್ರಮುಖರು ಮತ್ತು ಜನ ಸಾಮಾ
ನ್ಯರು ಸತ್ತುಹೋಗುವರು. ಯಾರೂ ಅವರನ್ನು ಹೂಳುವ
ದಿಲ್ಲ. ಅವರಿಗೋಸ್ಕರ ಗೋಳಾಡುವದಿಲ್ಲ. ಅವರ ಬಗ್ಗೆ
ದುಃಖ ಸೂಚಿಸಲು ಯಾರೂ ತಮಗೆ ಗಾಯಗಳನ್ನು
ಮಾಡಿಕೊಳ್ಳುವದಿಲ್ಲ; ತಮ್ಮ ತಲೆಗಳನ್ನು ಬೋಳಿಸಿ
ಕೊಳ್ಳುವದಿಲ್ಲ.
7ಸತ್ತವರಿಗಾಗಿ ಗೋಳಾಡುವವರ ಸಲು
ವಾಗಿ ಯಾರೂ ಆಹಾರವನ್ನು ತರುವದಿಲ್ಲ. ತಾಯಿಯ
ನ್ನಾಗಲೀ ತಂದೆಯನ್ನಾಗಲೀ ಕಳೆದುಕೊಂಡವರಿಗೆ
ಯಾರೂ ಸಮಾಧಾನವನ್ನು ಹೇಳುವದಿಲ್ಲ. ಸತ್ತವರಿಗಾಗಿ
ಅಳುವವರನ್ನು ಸಮಾಧಾನಪಡಿಸಲು ಯಾರೂ ಪಾನ
ಪಾತ್ರೆಯನ್ನು ನೀಡುವದಿಲ್ಲ.
8''ಯೆರೆಮೀಯನೇ, ಔತಣವನ್ನು ಏರ್ಪಡಿಸಿದ ಮನೆಗೆ
ಹೋಗಬೇಡ. ಆ ಮನೆಗೆ ಹೋಗಿ ಊಟ ಮಾಡುತ್ತಾ
ಪಾನ ಮಾಡುತ್ತಾ ಕುಳಿತುಕೊಳ್ಳಬೇಡ.
9ಇಸ್ರೇಲಿನ
ದೇವರೂ ಸರ್ವಶಕ್ತನೂ ಆಗಿರುವ ಯೆಹೋವನು ಹೀಗೆ
ಹೇಳುತ್ತಾನೆ: 'ಉಲ್ಲಾಸಪಡುತ್ತಿದ್ದ ಜನರ ಧ್ವನಿಯನ್ನು
ನಾನು ಬೇಗನೆ ನಿಲ್ಲಿಸಿಬಿಡುತ್ತೇನೆ. ಮದುವೆಯ
ಸಮಾರಂಭಗಳಲ್ಲಿ ಜನರು ಮಾಡುವ ಸಂತೋಷ
ಸಂಭ್ರಮದ ಧ್ವನಿಯನ್ನು ನಾನು ನಿಲ್ಲಿಸಿ ಬಿಡುತ್ತೇನೆ. ಇದು
ನಿನ್ನ ಜೀವನಕಾಲದಲ್ಲಿಯೇ ಸಂಭವಿಸುತ್ತದೆ. ಇದೆಲ್ಲ
ವನ್ನು ನಾನು ಬೇಗ ಮಾಡುತ್ತೇನೆ.'
10''ಯೆರೆಮೀಯನೇ, ನೀನು ಈ ವಿಷಯವನ್ನು
ಯೆಹೂದದ ಜನರಿಗೆ ಹೇಳಿದಾಗ 'ಈ ಮಹಾವಿಪತ್ತು
ನಮಗೆ ಸಂಭವಿಸಬೇಕೆಂದು ಯೆಹೋವನು ಏಕೆ
ನಿರ್ಣಯಿಸಿದ್ದಾನೆ? ನಮ್ಮ ಅಪರಾಧವೇನು? ನಮ್ಮ
ದೇವ ರಾದ ಯೆಹೋವನ ವಿರುದ್ಧವಾಗಿ ನಾವು ಮಾಡಿದ
ಪಾಪ ವೇನು?' ಎಂದು ಅವರು ಕೇಳುತ್ತಾರೆ.
11ನೀನು
ಅವರಿಗೆ ಹೀಗೆ ಹೇಳಬೇಕು: 'ನಿಮ್ಮ ಪೂರ್ವಿಕರು ನನ್ನ
ಉಪದೇಶ ದಂತೆ ನಡೆಯುವದನ್ನು ಬಿಟ್ಟುಬಿಟ್ಟರು'
ಎಂದು ದೇವರು ಹೇಳುತ್ತಾನೆ. 'ಅವರು ನನ್ನ
ಅನುಸರಣೆಯನ್ನು ಬಿಟ್ಟು ಬೇರೆ ದೇವರುಗಳನ್ನು
ಅನುಸರಿಸಲು ಮತ್ತು ಸೇವಿಸಲು ಪ್ರಾರಂಭಿಸಿದರು.
ಅವರು ಅನ್ಯದೇವರುಗಳನ್ನು ಪೂಜಿಸಿದರು. ನಿಮ್ಮ
ಪೂರ್ವಿಕರು ನನ್ನನ್ನು ತ್ಯಜಿಸಿ ನನ್ನ ಧರ್ಮ ವಿಧಿಗಳನ್ನು
ಮೀರಿದರು.
12ನೀವು ನಿಮ್ಮ ಪೂರ್ವಿಕರಿಗಿಂತ
ಭಯಂಕರವಾದ ಪಾಪವನ್ನು ಮಾಡಿದ್ದೀರಿ. ನೀವು ಬಹಳ
ಮೊಂಡರಾಗಿದ್ದೀರಿ. ನೀವು ನಿಮ್ಮ ಮನಸ್ಸಿಗೆ ಬಂದಂತೆ
ಮಾಡುತ್ತಿದ್ದೀರಿ. ನೀವು ನನ್ನ ಆಜ್ಞೆಯನ್ನು ಪಾಲಿಸುತ್ತಿಲ್ಲ.
13ಆದುದರಿಂದ ನಾನು ನಿಮ್ಮನ್ನು ಈ ದೇಶದ ಹೊರಗೆ
ಎಸೆಯುತ್ತೇನೆ. ನೀವು ಪರದೇಶಕ್ಕೆ ಸೆರೆ ಹೋಗುವಂತೆ
ಮಾಡುತ್ತೇನೆ. ನೀವು ಮತ್ತು ನಿಮ್ಮ ಪೂರ್ವಿಕರು ಎಂದೂ
ನೋಡದ ಪ್ರದೇಶಕ್ಕೆ ನೀವು ಹೋಗುವಿರಿ. ಆ
ಪ್ರದೇಶದಲ್ಲಿ ನೀವು ನಿಮ್ಮ ಮನಸ್ಸಿಗೆ ಬಂದಷ್ಟು
ಸುಳ್ಳುದೇವತೆಗಳ ಸೇವೆಮಾಡಬಹುದು. ನಾನು ನಿಮಗೆ
ಸಹಾಯವನ್ನೂ ಮಾಡುವದಿಲ್ಲ, ಯಾವ ರೀತಿಯ
ಒಲವನ್ನೂ ತೋರುವದಿಲ್ಲ.'
14ಯೆಹೋವನು ಹೇಳಿದನು: ''ಪ್ರಮಾಣ ಮಾಡ
ಬೇಕಾದರೆ ಜನರು 'ಇಸ್ರೇಲರನ್ನು ಈಜಿಪ್ಟಿನಿಂದ ಹೊರ
ತಂದ ಯೆಹೋವನ ಜೀವದಾಣೆ' ಎಂದು ಹೇಳುತ್ತಾರೆ.
ಒಂದು ಕಾಲ ಬರಲಿದೆ.
15ಆಗ ಅವರು 'ಇಸ್ರೇಲರನ್ನು
ಉತ್ತರದ ನಾಡಿನಿಂದಲೂ ಎಲ್ಲಾ ದೇಶಗಳಿಂದಲೂ
ಹೊರತಂದ ಯೆಹೋವನ ಜೀವದಾಣೆ.' ಇಸ್ರೇಲರನ್ನು
ನಾನು ಅವರ ಪೂರ್ವಿಕರಿಗೆ ಕೊಟ್ಟ ದೇಶಕ್ಕೆ ಮತ್ತೆ ಕರೆದು
ಕೊಂಡು ಬರುವೆನು. ಆದುದರಿಂದಲೇ ಜನರು ಹೀಗೆ
ಹೇಳುವರು.
16ಯೆಹೋವನು, ''ನಾನು ಅನೇಕ ಮೀನುಗಾರರನ್ನು
ಈ ಪ್ರದೇಶಕ್ಕೆ ಕರೆಸುವೆನು. ಆ ಮೀನುಗಾರರು
ಯೆಹೂದದ ಜನರನ್ನು ಬಂಧಿಸುವರು. ಇದಾದ ಮೇಲೆ
ನಾನು ಹಲವಾರು ಜನ ಬೇಟೆಗಾರರನ್ನು ಈ ಪ್ರದೇಶಕ್ಕೆ
ಕರೆಸುವೆನು. ಆ ಬೇಟೆಗಾರರು* ಪ್ರತಿಯೊಂದು ಪರ್ವತ,
ಬೆಟ್ಟ ಮತ್ತು ಬಂಡೆಗಳ ಸಂದುಗೊಂದುಗಳಲ್ಲಿ
ಯೆಹೂದ್ಯರನ್ನು ಬೇಟೆಯಾಡುವರು.
17ಅವರು
ಮಾಡುವ ಪಾಪಕಾರ್ಯಗಳು ನನಗೆ ಕಾಣಿಸುತ್ತಿವೆ.
ಯೆಹೂದದ ಜನರು ತಾವು ಮಾಡುವದನ್ನು ನನ್ನಿಂದ
ಮುಚ್ಚಿಡಲು ಸಾಧ್ಯವಿಲ್ಲ. ಅವರ ಪಾಪವು ನನಗೆ
ಗೊತ್ತಾಗುವುದು.
18ಅವರು ಮಾಡಿದ ದುಷ್ಟಕಾರ್ಯಗಳಿ
ಗಾಗಿ ನಾನು ಯೆಹೂದದ ಜನರನ್ನು ಶಿಕ್ಷಿಸುತ್ತೇನೆ.
ಪ್ರತಿಯೊಂದು ಪಾಪಕ್ಕಾಗಿ ನಾನು ಅವರನ್ನು ಎರಡು ಸಲ
ಶಿಕ್ಷಿಸುತ್ತೇನೆ. ಅವರು ನನ್ನ ದೇಶವನ್ನು 'ಹೊಲಸು'
ಮಾಡಿದ್ದಕ್ಕಾಗಿ ನಾನು ಹೀಗೆ ಮಾಡುತ್ತೇನೆ. ಅವರು ತಮ್ಮ

---

**ಆ ಮೀನುಗಾರರು ... ಬೇಟೆಗಾರರು** ಅಂದರೆ ಬಾಬಿಲೋನಿನ ಶತ್ರು ಸೈನಿಕರು .

ಭಯಂಕರವಾದ ವಿಗ್ರ ಹಗಳಿಂದ ನನ್ನ ಪ್ರದೇಶವನ್ನು
‘ಹೊಲಸು’ ಮಾಡಿದ್ದಾರೆ. ನಾನು ಆ ವಿಗ್ರಹಗಳನ್ನು
ದ್ವೇಷಿಸುತ್ತೇನೆ. ಆದರೆ ಅವರು ತಮ್ಮ ವಿಗ್ರಹಗಳಿಂದ ನನ್ನ
ದೇಶವನ್ನು ತುಂಬಿಸಿ ಬಿಟ್ಟಿದ್ದಾರೆ.’’

19 ಯೆಹೋವನೇ, ನೀನೇ ನನ್ನ ಬಲವಾಗಿರುವೆ. ನನ್ನ
ರಕ್ಷಕನಾಗಿರುವೆ. ಕಷ್ಟ ಬಂದಾಗ ಓಡಿಬಂದು
ಆಶ್ರಯ ಪಡೆಯಲು ಸುರಕ್ಷಿತ ಸ್ಥಳವಾಗಿರುವೆ.
ಜಗತ್ತಿನ ಎಲ್ಲಾ ಭಾಗಗಳ ಜನಾಂಗದ ಜನರು
ನಿನ್ನಲ್ಲಿಗೆ ಬರುವರು. ಅವರು, ‘‘ನಮ್ಮ
ಪೂರ್ವಿಕರು ಸುಳ್ಳುದೇವರುಗಳನ್ನಿಟ್ಟು ಕೊಂಡಿ
ದ್ದರು. ಅವರು ಆ ನಿರರ್ಥಕವಾದ ವಿಗ್ರಹಗಳನ್ನು
ಪೂಜಿಸಿದರು. ಆದರೆ ಆ ವಿಗ್ರಹಗಳು ಅವರಿಗೆ
ಕೊಂಚವೂ ಸಹಾಯ ಮಾಡಲಿಲ್ಲ’’ ಎಂದು
ಹೇಳುವರು.
20 ಜನರು ನಿಜವಾದ ದೇವರುಗಳನ್ನು ಮಾಡ
ಬಲ್ಲರೇ? ಇಲ್ಲ. ಅವರು ವಿಗ್ರಹಗಳನ್ನು ಮಾಡ
ಬಹುದು. ಆದರೆ ಆ ವಿಗ್ರಹಗಳು ನಿಜವಾದ
ದೇವರುಗಳಲ್ಲ.
21 ‘‘ವಿಗ್ರಹಗಳನ್ನು ಮಾಡುವ ಜನರಿಗೆ ನಾನು ಪಾಠ
ಕಲಿಸುತ್ತೇನೆ. ಈಗಲೇ ನಾನು ಅವರಿಗೆ ನನ್ನ
ಶಕ್ತಿಯ ಬಗ್ಗೆ ಮತ್ತು ನನ್ನ ಬಲದ ಬಗ್ಗೆ
ಕಲಿಸುವೆನು. ಆಗ ನಾನು ದೇವರೆಂಬುದು ಅವರಿಗೆ
ತಿಳಿಯುವುದು. ನಾನೇ ಯೆಹೋವನು ಎಂಬುದು
ಅವರಿಗೆ ಗೊತ್ತಾಗುವುದು.’’

## ಹೃದಯದ ಮೇಲೆ ಬರೆದ ಅಪರಾಧ

17 ‘‘ಯೆಹೂದದ ಜನರ ಅಪರಾಧ ಅಳಿಸಲಾಗದ
ಸ್ಥಳದಲ್ಲಿ ಬರೆಯಲಾಗಿದೆ. ಆ ಅಪರಾಧಗಳು
ಕಬ್ಬಿಣದ ಲೇಖನಿಯಿಂದ ಕಲ್ಲಿನ ಮೇಲೆ ಕೆತ್ತ
ಲಾಗಿವೆ. ಅವರ ಪಾಪಗಳು ವಜ್ರದ ಮೊನೆಯುಳ್ಳ
ಲೇಖನಿಯಿಂದ ಕಲ್ಲಿನ ಮೇಲೆ ಕೆತ್ತಲಾಗಿವೆ. ಅವರ
ಹೃದಯವೇ ಆ ಕಲ್ಲು, ಆ ಪಾಪಗಳು ಅವರ ಯಜ್ಞ
ವೇದಿಕೆಗಳ ಕೊಂಬುಗಳಲ್ಲಿ ಕೆತ್ತಿವೆ.
2 ಅವರ ಮಕ್ಕಳು ಸುಳ್ಳುದೇವರುಗಳಿಗೆ ಅರ್ಪಿಸಿದ
ಯಜ್ಞವೇದಿಕೆಗಳನ್ನು ಜ್ಞಾಪಿಸಿಕೊಳ್ಳುವರು.
ಅವರು ಅಶೇರಳಿಗೆ* ಅರ್ಪಿಸಿದ ಮರದ ವಿಗ್ರಹ
ಸ್ತಂಭಗಳನ್ನು ಜ್ಞಾಪಿಸಿಕೊಳ್ಳುವರು. ಅವರು
ಸೊಂಪಾಗಿ ಬೆಳೆದ ಮರದ ಕೆಳಗೆ ಮತ್ತು ಬೆಟ್ಟಗಳ
ಮೇಲೆ ಆ ವಸ್ತುಗಳನ್ನು ಜ್ಞಾಪಿಸಿಕೊಳ್ಳುವರು.
3 ಅವರು ಆ ವಸ್ತುಗಳನ್ನು ಬೆಟ್ಟಗಳ ಮೇಲೆಯೂ
ಬಯಲು ಪ್ರದೇಶದಲ್ಲಿಯೂ ಜ್ಞಾಪಿಸಿಕೊಳ್ಳು
ವರು. ಯೆಹೂದದ ಜನರಲ್ಲಿ ಭಂಡಾರಗಳಿವೆ.
ನಾನು ಅವುಗಳನ್ನು ಬೇರೆಯವರಿಗೆ ಒಪ್ಪಿಸುತ್ತೇನೆ.
ನಿಮ್ಮ ದೇಶದಲ್ಲಿದ್ದ ಎಲ್ಲಾ ಉನ್ನತ ಸ್ಥಳಗಳನ್ನು
ಜನರು ನಾಶಮಾಡುವರು. ಆ ಸ್ಥಳಗಳಲ್ಲಿ ಪೂಜೆ
ಮಾಡಿ ನೀವು ಪಾಪಕ್ಕೆ ಗುರಿಯಾಗಿರುವಿರಿ.
4 ನಾನು ನಿಮಗೆ ಕೊಟ್ಟ ಭೂಮಿಯನ್ನು ನೀವು
ಕಳೆದುಕೊಳ್ಳುವಿರಿ. ನಿಮ್ಮನ್ನು ನಿಮಗೆ ತಿಳಿಯದ
ನಾಡಿನಲ್ಲಿ ನಿಮ್ಮ ಶತ್ರುಗಳ ದಾಸರನ್ನಾಗಿ ಮಾಡು
ವೆನು. ಏಕೆಂದರೆ ನನಗೆ ತುಂಬಾ ಕೋಪ ಬಂದಿದೆ.
ನನ್ನ ಕೋಪವು ಉರಿಯುವ ಜ್ವಾಲೆಯಂತಿದೆ;
ನೀವು ಅದರಲ್ಲಿ ಭಸ್ಮವಾಗಿ ಹೋಗುವಿರಿ.’’

## ಜನರಲ್ಲಿ ನಂಬಿಕೆ, ದೇವರಲ್ಲಿ ನಂಬಿಕೆ.

5 ಯೆಹೋವನು ಹೀಗೆ ಹೇಳಿದನು: ‘‘ಕೇವಲ ಬೇರೆ
ಜನರನ್ನು ನಂಬಿದವರಿಗೆ ಕೇಡಾಗುವುದು. ಬಲ
ಕ್ಕಾಗಿ, ಅನ್ಯರನ್ನು ನಂಬಿದವರಿಗೆ ಕೇಡಾಗುವುದು.
ಏಕೆಂದರೆ ಅಂಥವರು ದೇವರಲ್ಲಿ ನಂಬಿಕೆ ಇಡು
ವದನ್ನು ಬಿಟ್ಟುಬಿಟ್ಟಿರುತ್ತಾರೆ.
6 ಆ ಜನರು ನಿರ್ಜನವಾದ ಪ್ರದೇಶದಲ್ಲಿದ್ದ,
ಸುಡುವ ಬರಡುಭೂಮಿಯಲ್ಲಿದ್ದ, ಬಂಜರು
ಭೂಮಿಯಲ್ಲಿ ಬೆಳೆದ, ದೇವರು ನೀಡಬಹುದಾದ
ಒಳ್ಳೆಯ ವಸ್ತುಗಳ ಬಗ್ಗೆ ಏನೂ ಅರಿಯದ ಒಂದು
ಪೊದೆಯಂತಿರುತ್ತಾರೆ.
7 ಆದರೆ ದೇವರಲ್ಲಿ ನಂಬಿಕೆಯುಳ್ಳ ಮನುಷ್ಯನು
ದೇವರ ಕೃಪೆಗೆ ಪಾತ್ರನಾಗುವನು. ಏಕೆಂದರೆ ತಾನು
ನಂಬಿಕೆಯುಳ್ಳವನೆಂದು ಅವನು ದೇವರಿಗೆ
ತೋರಿಸಿಕೊಡುವನು.
8 ಆ ಮನುಷ್ಯನು ನೀರಿನ ಸಮೀಪದಲ್ಲಿ ನೆಟ್ಟಿರುವ,
ಆಳವಾಗಿ ಬೇರೂರಿ ನೀರಿನ ಸೆಲೆಗಳನ್ನು ತಲುಪಿ
ರುವ, ಉಷ್ಣಕ್ಕೆ ಹೆದರದ, ಯಾವಾಗಲೂ ಹಸಿರೆಲೆ
ಗಳಿಂದ ಸೊಂಪಾದ, ಮಳೆ ಬೀಳದ ವರ್ಷದ
ಲ್ಲಿಯೂ ಚಿಂತಿಸದ, ಯಾವಾಗಲೂ ಫಲಭರಿತ
ವಾಗಿರುವ ಮರದಂತೆ ಇರುವನು.

9 ‘‘ಮನುಷ್ಯನ ಬುದ್ಧಿಯು ವಂಚನೆ ಮಾಡುತ್ತದೆ. ಆ
ಬುದ್ಧಿಯು ಅತೀ ವ್ಯಾಧಿಗ್ರಸ್ತವಾಗಿರಬಹುದು,
ಯಾರಿಂದಲೂ ಬುದ್ಧಿಯ ನಿಜವಾದ ಸ್ವರೂಪ
ವನ್ನರಿಯಲಾಗುವದಿಲ್ಲ.
10 ನಾನೇ ಯೆಹೋವನು, ನಾನು ಮನುಷ್ಯನ ಹೃದ
ಯದ ಆಳವನ್ನು ನೋಡಬಲ್ಲೆ, ನಾನು ಮನುಷ್ಯನ

---

**ಅಶೇರ** ಕಾನಾನ್ಯರ ಒಬ್ಬ ಪ್ರಮುಖ ದೇವತೆ, ಆಗ ಅವಳು ಬಾಳನ ಹೆಂಡತಿಯೆಂದು ಜನರು ಭಾವಿಸಿದ್ದರು.

ಬುದ್ಧಿಯನ್ನು ಪರೀಕ್ಷಿಸಬಲ್ಲೆ, ಆದುದರಿಂದ ಪ್ರತಿ
ಯೊಬ್ಬ ಮನುಷ್ಯನಿಗೆ ತಕ್ಕ ಪ್ರತಿ ಫಲವನ್ನು ನಾನು
ನಿರ್ಧರಿಸಬಲ್ಲೆ. ಪ್ರತಿಯೊಬ್ಬ ಮನುಷ್ಯನಿಗೆ ಅವನ
ಕೆಲಸಕ್ಕೆ ತಕ್ಕಂತೆ ಸರಿಯಾಗಿ ಫಲವನ್ನು
ಕೊಡುವೆನು.

11 ಕೆಲವು ಸಲ ಪಕ್ಷಿಯು ತಾನು ಇಡದ ಮೊಟ್ಟೆಗೆ ಕಾವು
ಕೊಡುತ್ತದೆ. ಹಣಕ್ಕಾಗಿ ಮೋಸಮಾಡುವ ಮನು
ಷ್ಯನು ಆ ಪಕ್ಷಿಯಂತಿರುವನು, ಅವನು ತನ್ನ ಮಧ್ಯ
ಪ್ರಾಯದಲ್ಲಿ ತನ್ನ ಹಣವನ್ನೆಲ್ಲಾ ಕಳೆದು
ಕೊಳ್ಳುವನು. ಅವನು ತನ್ನ ಅಂತ್ಯಕಾಲದಲ್ಲಿ
ಮೂರ್ಖನಾಗಿ ಕಂಡುಬರುವನು.''

12 ಆದಿಯಿಂದ ನಮ್ಮ ಪವಿತ್ರಾಲಯವು * ಯೆಹೋ
ವನ ಮಹತ್ವದ ಸಿಂಹಾಸನವಾಗಿದೆ. ಅದೊಂದು
ಬಹಳ ಪ್ರಮುಖವಾದ ಸ್ಥಳವಾಗಿದೆ.

13 ಯೆಹೋವನೇ, ನೀನು ಇಸ್ರೇಲಿನ ಆಶಾಕಿರಣ,
ಯೆಹೋವನೇ, ನೀನು ಜೀವಜಲದ ಬುಗ್ಗೆ
ಯಂತಿರುವೆ, ಯಾರಾದರೂ ಯೆಹೋವನ ಅನು
ಸರಣೆಯನ್ನು ತ್ಯಜಿಸಿದರೆ ಅವರ ಜೀವನ ಬಹಳ
ಮೊಟಕಾಗುತ್ತದೆ.

## ಯೆರೆಮೀಯನ ಮೂರನೆ ದೂರು

14 ಯೆಹೋವನೇ, ನೀನು ನನ್ನನ್ನು ವಾಸಿಮಾಡಿದರೆ
ನಿಜವಾಗಿಯೂ ನಾನು ಗುಣಹೊಂದುತ್ತೇನೆ.
ನನ್ನನ್ನು ರಕ್ಷಿಸು. ಆಗ ನಿಜವಾಗಿಯೂ ರಕ್ಷಣೆ
ಹೊಂದಿದವನಾಗುವೆನು. ಯೆಹೋವನೇ, ನಾನು
ನಿನ್ನನ್ನು ಸ್ತುತಿಸುತ್ತೇನೆ.

15 ಯೆಹೂದದ ಜನರು ನನಗೆ ಪ್ರಶ್ನೆಗಳನ್ನು ಕೇಳು
ತ್ತಿರುತ್ತಾರೆ. ''ಯೆರೆಮೀಯನೇ, ಯೆಹೋವನ
ಸಂದೇಶ ಎಲ್ಲಿದೆ? ಆ ಸಂದೇಶವು ಸತ್ಯವಾಗುವು
ದನ್ನು ನಾವು ನೋಡೋಣ'' ಎಂದು
ಅವರನ್ನುತ್ತಾರೆ.

16 ಯೆಹೋವನೇ, ನಾನು ನಿನ್ನನ್ನು ಬಿಟ್ಟು ಓಡಿ
ಹೋಗಲಿಲ್ಲ, ನಾನು ನಿನ್ನನ್ನು ಅನುಸರಿಸಿದೆನು.
ನೀನು ಹೇಳಿದಂತೆ ನಾನು ಕುರುಬನಾದೆ,* ಆ
ಭಯಂಕರ ದಿನವು ಬರಲೆಂದು ನಾನು ಬಯಸ
ಲಿಲ್ಲ.* ಯೆಹೋವನೇ, ನಾನು ಹೇಳಿದ್ದೆಲ್ಲ ನಿನಗೆ
ಗೊತ್ತಿದೆ. ಈಗ ನಡೆಯುತ್ತಿರುವುದನ್ನೆಲ್ಲ ನೀನು
ನೋಡುತ್ತಿರುವೆ .

17 ಯೆಹೋವನೇ, ನನ್ನನ್ನು ಹಾಳುಮಾಡಬೇಡ.
ಕಷ್ಟಕಾಲದಲ್ಲಿ ನಾನು ನಿನ್ನನ್ನೇ ಅವಲಂಭಿಸಿರು
ತ್ತೇನೆ.

18 ಜನರು ನನ್ನನ್ನು ಹಿಂಸಿಸುತ್ತಿದ್ದಾರೆ. ಆ ಜನರು ಲಜ್ಜೆ
ಪಡುವಂತೆ ಮಾಡು. ನನ್ನನ್ನು ನಿರಾಶೆಗೊಳಿಸ
ಬೇಡ. ಆ ಜನರಿಗೆ ಭೀತಿಯುಂಟಾಗಲಿ, ಆದರೆ
ನನಗೆ ಭಯವಾಗುವಂತೆ ಮಾಡಬೇಡ. ನನ್ನ ವೈರಿ
ಗಳಿಗೆ ಭಯಂಕರವಾದ ವಿನಾಶದ ದಿನವು ಬರು
ವಂತೆ ಮಾಡು. ಅವರನ್ನು ಮುರಿದುಬಿಡು, ಮತ್ತೆ
ಮತ್ತೆ ಮುರಿದುಬಿಡು.

## ಸಬ್ಬತ್ ದಿನವನ್ನು ಪವಿತ್ರವಾಗಿಡಬೇಕು

19 ಯೆಹೋವನು ನನಗೆ ಹೀಗೆ ಹೇಳಿದನು,
''ಯೆರೆಮೀಯನೇ, ನೀನು ಹೋಗಿ ಯೆಹೂದದ
ರಾಜರು ಸಂಚರಿಸುವ ಜೆರುಸಲೇಮಿನ ಜನರ ದ್ವಾರ
ದಲ್ಲಿ* ನಿಲ್ಲು. ಜನರಿಗೆ ನನ್ನ ಸಂದೇಶವನ್ನು ಹೇಳು.
ಆಮೇಲೆ ಜೆರುಸಲೇಮಿನ ಎಲ್ಲಾ ದ್ವಾರಗಳಿಗೆ ಹೋಗಿ
ಹಾಗೆಯೇ ಮಾಡು.

20 ''ಆ ಜನರಿಗೆ ಹೇಳು, 'ಯೆಹೋವನ ಸಂದೇಶವನ್ನು
ಕೇಳಿರಿ. ಯೆಹೂದದ ರಾಜರೇ ಕೇಳಿರಿ. ಯೆಹೂದದ
ಎಲ್ಲಾ ಜನರೇ ಕೇಳಿರಿ. ಈ ದ್ವಾರಗಳಿಂದ ಜೆರುಸಲೇಮಿಗೆ
ಬರುವ ಜನರೇ, ನಾನು ಹೇಳುವದನ್ನು ಕೇಳಿರಿ,

21 ಯೆಹೋವನು ಹೀಗೆ ಹೇಳುತ್ತಾನೆ, ಸಬ್ಬತ್ ದಿನ
ದಂದು ನೀವು ಯಾವ ಹೊರೆಯನ್ನೂ ಹೊತ್ತುಕೊಂಡು
ಹೋಗದಂತೆ ಎಚ್ಚರವಹಿಸಿರಿ. ಸಬ್ಬತ್ ದಿನದಂದು ಯಾವ
ಹೊರೆಯನ್ನೂ ಜೆರುಸಲೇಮಿನ ದ್ವಾರಗಳ ಮೂಲಕ ತರ
ಬೇಡಿರಿ. 22 ಸಬ್ಬತ್ ದಿನದಂದು ನಿಮ್ಮ ಮನೆಯಿಂದ
ಯಾವ ಹೊರೆಯನ್ನೂ ಈಚೆಗೆ ತೆಗೆದುಕೊಂಡು ಬರ
ಬೇಡಿರಿ. ಆ ದಿನ ಯಾವ ಕೆಲಸವನ್ನೂ ಮಾಡಬೇಡಿರಿ.
ಸಬ್ಬತ್ ದಿನವನ್ನು ನೀವು ಪವಿತ್ರದಿನವನ್ನಾಗಿ ಮಾಡ
ಬೇಕು. ನಾನು ನಿಮ್ಮ ಪೂರ್ವಿಕರಿಗೆ ಇದೇ ಆದೇಶವನ್ನು
ಕೊಟ್ಟೆ. 23 ಆದರೆ ನಿಮ್ಮ ಪೂರ್ವಿಕರು ನನ್ನ ಆಜ್ಞೆಯನ್ನು
ಪಾಲಿಸಲಿಲ್ಲ. ಅವರು ನನಗೆ ಗಮನಕೊಡಲಿಲ್ಲ. ನಿಮ್ಮ
ಪೂರ್ವಿಕರು ತುಂಬಾ ಮೊಂಡರಾಗಿದ್ದರು. ನಾನು ಅವ
ರನ್ನು ದಂಡಿಸಿದೆ. ಆದರೆ ಅದರಿಂದ ಏನೂ ಪ್ರಯೋಜನ
ವಾಗಲಿಲ್ಲ. ಅವರು ನನ್ನ ಮಾತನ್ನು ಕೇಳಲಿಲ್ಲ. 24 ಆದರೆ
ನೀವು ಎಚ್ಚರಿಕೆಯಿಂದ ನನ್ನ ಆಜ್ಞೆಯನ್ನು ಪಾಲಿಸ

**ಪವಿತ್ರಾಲಯ** ಜೆರುಸಲೇಮಿನಲ್ಲಿದ್ದ ಪವಿತ್ರಾಲಯ.

**ಕುರುಬ ದೇವರ** ಜನರನ್ನು ಕೆಲವು ಸಲ ಕುರಿಗಳೆಂದು, ಅವರನ್ನು ನೋಡಿಕೊಳ್ಳುವವರನ್ನು ಕುರುಬರೆಂದು ಹೇಳಲಾಗಿದೆ.

**ಆ ... ಬಯಸಲಿಲ್ಲ** ಯೆರೆಮೀಯನು ಬರಲಿದ್ದ ವಿಪತ್ತುಗಳ ಬಗ್ಗೆ ಮತ್ತು ಇಕ್ಕಟ್ಟುಗಳ ಬಗ್ಗೆ ಪ್ರವಾದಿಸಿದನು,ಆದರೆ ಅವುಗಳು ನೆರವೇರುವುದು ಅವನಿಗೆ ಇಷ್ಟವಿರಲಿಲ್ಲ.

**ಜನರ ದ್ವಾರ** ಇದು ಜೆರುಸಲೇಮಿಗೆ ಹೋಗುವ ದ್ವಾರಗಳಲ್ಲಿ ಒಂದಾಗಿರಬಹುದು, ಅಥವಾ ಯಾಜಕರಲ್ಲದವರು ದೇವಾಲಯಕ್ಕೆ ಹೋಗುತ್ತಿದ್ದ ದಕ್ಷಿಣದ ದ್ವಾರಗಳಲ್ಲಿ ಒಂದಾಗಿರಬಹುದು.

ಬೇಕು.''' ಇದು ಯೆಹೋವನ ನುಡಿ. '''ನೀವು ಸಬ್ಬತ್
ದಿನದಂದು ಜೆರುಸಲೇಮಿನ ದ್ವಾರಗಳ ಮೂಲಕ ಯಾವ
ಭಾರವನ್ನೂ ತರಬಾರದು. ಸಬ್ಬತ್ ದಿನವನ್ನು ನೀವು
ಪವಿತ್ರದಿನವನ್ನಾಗಿ ಮಾಡಬೇಕು. ಆ ದಿನ ನೀವು ಯಾವ
ಕೆಲಸವನ್ನೂ ಮಾಡಬಾರದು.''

25'''ನೀವು ಈ ಆಜ್ಞೆಯನ್ನು ಪಾಲಿಸಿದರೆ ದಾವೀದನ
ಸಿಂಹಾಸನಾರೂಢನಾದ ರಾಜರು ಜೆರುಸಲೇಮಿನ ದ್ವಾರ
ಗಳಿಂದ ಬರುತ್ತಾರೆ. ಆ ರಾಜರು ರಥಗಳಲ್ಲಿಯೂ ಅಶ್ವಾ
ರೂಢರಾಗಿಯೂ ಬರುವರು. ಯೆಹೂದದ ಮತ್ತು
ಜೆರುಸಲೇಮಿನ ಜನನಾಯಕರುಗಳು ಆ ರಾಜರ ಜೊತೆ
ಯಲ್ಲಿ ಬರುವರು. ಜೆರುಸಲೇಮ್ ಪಟ್ಟಣದಲ್ಲಿ ಜನರು
ಯಾವಾಗಲೂ ವಾಸವಾಗಿರುವರು. 26ಜೆರುಸಲೇಮಿಗೆ
ಯೆಹೂದದ ಪಟ್ಟಣಗಳಿಂದ ಜನರು ಬರುವರು. ಅದರ
ಸುತ್ತಲೂ ಇದ್ದ ಸಣ್ಣ ಸಣ್ಣ ಹಳ್ಳಿಗಳಿಂದ ಜನರು ಜೆರುಸ
ಲೇಮಿಗೆ ಬರುವರು. ಬೆನ್ಯಾಮೀನ್ ಕುಲದವರು ವಾಸಿ
ಸುವ ಪ್ರದೇಶದಿಂದ ಜನರು ಬರುವರು. ಪಶ್ಚಿಮ ಬೆಟ್ಟ
ಗಳ ಇಳಿಜಾರು ಪ್ರದೇಶದಿಂದ ಮತ್ತು ಬೆಟ್ಟಪ್ರದೇಶ
ದಿಂದ ಜನರು ಬರುವರು. ನೆಗೆವ್ ಪ್ರದೇಶದಿಂದ ಜನರು
ಬರುವರು. ಆ ಜನರೆಲ್ಲರು ಸರ್ವಾಂಗಹೋಮಗಳನ್ನು,
ಯಜ್ಞಗಳನ್ನು, ಧಾನ್ಯನೈವೇದ್ಯಗಳನ್ನು, ಧೂಪವನ್ನು
ಮತ್ತು ಕೃತಜ್ಞತಾಯಜ್ಞಗಳನ್ನು ತೆಗೆದುಕೊಂಡು
ಯೆಹೋವನ ಆಲಯಕ್ಕೆ ಬರುವರು. 27ನೀವು ನನ್ನ
ಮಾತನ್ನು ಕೇಳದಿದ್ದರೆ ಮತ್ತು ನನ್ನ ಆಜ್ಞೆಯನ್ನು ಪಾಲಿಸ
ದಿದ್ದರೆ ಕೇಡಾಗುವುದು. ಸಬ್ಬತ್ ದಿನದಲ್ಲಿ ಹೊರೆ ಗಳನ್ನು
ಹೊತ್ತುಕೊಂಡು ಜೆರುಸಲೇಮಿಗೆ ಹೋದರೆ ನೀವು ಆ
ದಿನವನ್ನು ಪವಿತ್ರದಿನವೆಂದು ಆಚರಿಸಿದಂತೆ ಆಗುವುದಿಲ್ಲ.
ಆಗ ನಾನು ನಂದಿಸಲಾಗದ ಬೆಂಕಿಯನ್ನು ಹೊತ್ತಿಸುತ್ತೇನೆ.
ಆ ಬೆಂಕಿಯು ಜೆರುಸಲೇಮಿನ ದ್ವಾರಗಳಲ್ಲಿ ಪ್ರಾರಂಭ
ವಾಗಿ ಅರಮನೆಗಳನ್ನು ಸುಡುವವರೆಗೂ ಉರಿಯು
ತ್ತಿರುವುದು.'''·

## ಕುಂಬಾರ ಮತ್ತು ಜೇಡಿಮಣ್ಣು

18 ಯೆಹೋವನಿಂದ ಯೆರೆಮೀಯನಿಗೆ ಈ
ಸಂದೇಶ ಬಂದಿತು: 2''ಯೆರೆಮೀಯನೇ, ನೀನು
ಕುಂಬಾರನ ಮನೆಗೆ ಹೋಗು. ನಾನು ಕುಂಬಾರನ
ಮನೆಯಲ್ಲಿಯೇ ನಿನಗೆ ಸಂದೇಶವನ್ನು ಕೊಡುತ್ತೇನೆ.''

3ನಾನು ಕುಂಬಾರನ ಮನೆಗೆ ಹೋದೆನು. ಅವನು
ಜೇಡಿಮಣ್ಣನ್ನು ಉಪಯೋಗಿಸಿ ಚಕ್ರದಿಂದ ಕೆಲಸ
ಮಾಡುವದನ್ನು ನಾನು ಕಂಡೆನು. 4ಅವನು ಜೇಡಿಮಣ್ಣಿ
ನಿಂದ ಒಂದು ಮಡಕೆಯನ್ನು ಮಾಡುತ್ತಿದ್ದನು. ಆ ಮಡಕೆ
ಯಲ್ಲಿ ಯಾವುದೋ ಒಂದು ದೋಷವಿತ್ತು. ಆದುದ
ರಿಂದ ಆ ಕುಂಬಾರನು ಪುನಃ ಆ ಜೇಡಿಮಣ್ಣನ್ನು ಬಳಸಿ
ಮತ್ತೊಂದು ಮಡಕೆಯನ್ನು ಮಾಡಿದನು. ಮಡಕೆಗೆ
ತಾನು ಬಯಸಿದ ಆಕಾರವನ್ನು ಕೊಡಲು ತನ್ನ ಕೈಗಳನ್ನು
ಉಪಯೋಗಿಸಿದನು.

5ಆಗ ನನಗೆ ಯೆಹೋವನಿಂದ ಈ ಸಂದೇಶ ಬಂದಿತು:
6''ಇಸ್ರೇಲ್ ಮನೆತನದವರೇ, ನಾನು ನಿಮಗೆ ಹೀಗೆಯೇ
ಮಾಡಲು ಸಾಧ್ಯವೆಂಬುದನ್ನು ನೀವು ಬಲ್ಲಿರಿ. ನೀವು
ಕುಂಬಾರನ ಕೈಯಲ್ಲಿದ್ದ ಜೇಡಿಮಣ್ಣಿನಂತಿದ್ದೀರಿ. ನಾನು
ಆ ಕುಂಬಾರನಂತಿದ್ದೇನೆ.

7ಒಮ್ಮೆ ನಾನು ಒಂದು ಜನಾಂಗವನ್ನಾಗಲಿ ಅಥವಾ
ರಾಜ್ಯವನ್ನಾಗಲಿ ಕುರಿತು ಮಾತನಾಡುವಾಗ ಆ ಜನಾಂಗ
ವನ್ನು ನಾನು ಖಂಡಿಸುವೆನೆಂದು ಮತ್ತು ಆ ಜನಾಂಗವನ್ನು
ನಾನು ನಾಶಪಡಿಸುವೆನೆಂದು ಹೇಳಬಹುದು. 8ಆದರೆ ಆ
ಜನಾಂಗದ ಜನರು ತಮ್ಮ ಮನಸ್ಸನ್ನು ಮತ್ತು ಜೀವನವನ್ನು
ಪರಿವರ್ತಿಸಿಕೊಳ್ಳಬಹುದು. ಆ ಜನಾಂಗದ ಜನರು
ಮಾಡುವ ದುಷ್ಕೃತ್ಯಗಳನ್ನು ನಿಲ್ಲಿಸಬಹುದು. ಆಗ ನಾನು
ನನ್ನ ವಿಚಾರವನ್ನು ಬದಲಾಯಿಸಿ, ಆ ಜನಾಂಗವನ್ನು ನಾಶ
ಪಡಿಸಬೇಕೆಂದು ಮಾಡಿದ ನನ್ನ ಮುಂಚಿನ ಯೋಜನೆ
ಗಳನ್ನು ಕಾರ್ಯರೂಪಕ್ಕೆ ತರದಿರಬಹುದು. 9ಇನ್ನೊಮ್ಮೆ
ಒಂದು ಜನಾಂಗದ ಬಗ್ಗೆ ಹೇಳುವಾಗ ಆ ಜನಾಂಗವನ್ನು
ನಾನು ಅಭಿವೃದ್ಧಿಗೆ ತರುತ್ತೇನೆ, ಅದನ್ನು ನೆಟ್ಟು ಕಟ್ಟುತ್ತೇನೆ
ಎಂದು ಹೇಳಬಹುದು. 10ಆದರೆ ಆ ಜನಾಂಗವು ನನ್ನ
ಆಜ್ಞಾಪಾಲನೆಯನ್ನು ಮಾಡದೆ ದುಷ್ಕೃತ್ಯಗಳಲ್ಲಿ ತೊಡಗಿ
ದರೆ ಅದನ್ನು ನೋಡಿ ಆ ಜನಾಂಗಕ್ಕೆ ನಾನು ಮಾಡ
ಬೇಕೆಂದಿದ್ದ ಒಳಿತಿನ ಬಗ್ಗೆ ಮತ್ತೊಮ್ಮೆ ವಿಚಾರ ಮಾಡ
ಬಹುದು.

11''ಯೆರೆಮೀಯನೇ, ಯೆಹೂದದ ಜನರಿಗೆ ಮತ್ತು
ಜೆರುಸಲೇಮಿನಲ್ಲಿ ವಾಸಿಸುವ ಜನರಿಗೆ ಯೆಹೋವನು
ಇಂತೆನ್ನುವನು; 'ಸದ್ಯ ನಾನು ನಿಮಗೋಸ್ಕರ ತೊಂದರೆ
ಗಳನ್ನು ಎಬ್ಬಿಸುತ್ತೇನೆ. ನಿಮ್ಮ ವಿರುದ್ಧ ಯೋಜನೆಗಳನ್ನು
ಹಾಕುತ್ತಿದ್ದೇನೆ. ಆದುದರಿಂದ ನೀವು ಮಾಡುತ್ತಿರುವ
ದುಷ್ಕೃತ್ಯಗಳನ್ನು ನಿಲ್ಲಿಸಬೇಕು. ಪ್ರತಿಯೊಬ್ಬನು ಪರಿ
ವರ್ತನೆ ಹೊಂದಿ ಒಳ್ಳೆಯ ಕೆಲಸಗಳನ್ನು ಮಾಡಲು
ಪ್ರಾರಂಭಿಸಬೇಕು' ಎಂದು ಹೇಳು. 12ಆದರೆ ಯೆಹೂ
ದದ ಜನರು, 'ಪ್ರಯತ್ನ ಮಾಡುವದರಿಂದ ಏನೂ
ಪ್ರಯೋಜನವಿಲ್ಲ. ನಮ್ಮ ಮನಸ್ಸಿಗೆ ಬಂದಂತೆ ನಾವು
ಮಾಡುತ್ತಿದ್ದೇವೆ. ನಮ್ಮಲ್ಲಿ ಪ್ರತಿಯೊಬ್ಬರೂ ನಮ್ಮ ದುಷ್ಟ
ಮತ್ತು ಮೊಂಡುಮನಸ್ಸು ಹೇಳಿದಂತೆ ನಡೆಯುವೆವು
ಎಂಬುದಾಗಿ ಉತ್ತರಿಸುವರು''' ಎಂದನು.

13 ಯೆಹೋವನು ಹೇಳುವದನ್ನು ಆಲಿಸಿರಿ: ''ಬೇರೆ
ಜನಾಂಗದ ಜನರಿಗೆ ಈ ಪ್ರಶ್ನೆಯನ್ನು ಕೇಳಿರಿ,

‘ಇಸ್ರೇಲ್ ಮಾಡಿದಂಥ ದುಷ್ಕೃತ್ಯಗಳನ್ನು ಬೇರೆ
ಯಾರಾದರೂ ಮಾಡಿದ್ದನ್ನು ನೀವು ಎಂದಾದರೂ
ಕೇಳಿದ್ದೀರಾ?’ ಇಸ್ರೇಲ್ ದೇಶವು ದೇವರ
ವಧುವಿನಂತಿದೆ.
14 ಲೆಬನೋನಿನ ಪರ್ವತಗಳ ಮೇಲಿನ ಹಿಮವು ಇಳಿ
ಜಾರಿನ ಬಂಡೆಯಿಂದ ಎಂದಾದರೂ ಕರಗು
ವುದೇ? ಬಹುದೂರದಲ್ಲಿ ಹುಟ್ಟಿ ಹರಿದು ಬರುವ
ತೊರೆಗಳು ಎಂದಾದರೂ ಹರಿಯದೆ ನಿಂತು
ಹೋಗುವುದೇ? *
15 ಆದರೆ ನನ್ನ ಜನರು ನನ್ನನ್ನು ಮರೆತಿದ್ದಾರೆ. ಅವರು
ನಿಷ್ಪ್ರಯೋಜಕವಾದ ವಿಗ್ರಹಗಳಿಗೆ ನೈವೇದ್ಯ
ಮಾಡುತ್ತಾರೆ. ನನ್ನ ಜನರು ತಾವು ಮಾಡುವ
ಕೆಲಸಗಳಲ್ಲಿ ಮುಗ್ಗರಿಸುತ್ತಾರೆ. ಅವರು ತಮ್ಮ
ಪೂರ್ವಿಕರ ಹಳೆಯ ಹಾದಿಯಲ್ಲಿಯೇ ಮುಗ್ಗರಿ
ಸುತ್ತಾರೆ. ನನ್ನ ಜನರು ಒಳ್ಳೆಯ ರಾಜಬೀದಿಯ
ಮೇಲೆ ನನ್ನನ್ನು ಹಿಂಬಾಲಿಸುವದನ್ನು ತೊರೆದು
ಹಾಳಾದ ಹಾದಿಯನ್ನು ಹಿಡಿಯುತ್ತಾರೆ.
16 ಆದುದರಿಂದ ಯೆಹೂದ್ಯರ ದೇಶವು ಬರಿದಾದ
ಮರುಭೂಮಿಯಾಗುವುದು. ಜನರು ಇಲ್ಲಿಂದ
ಹಾದುಹೋಗುವಾಗಲ್ಲೆಲ್ಲಾ ಸಿಳ್ಳುಹಾಕಿ ತಲೆ
ಯಾಡಿಸುವರು. ದೇಶವು ಹಾಳಾದುದನ್ನು ನೋಡಿ
ಬೆರಗಾಗುವರು.

17 ‘‘ಪೂರ್ವದಿಂದ ಬರುವ ಗಾಳಿಯಂತೆ ಯೆಹೂದದ
ಜನರನ್ನು ಅವರ ವೈರಿಗಳ ಎದು ರಿನಲ್ಲಿ ಚದರಿಸಿ
ಬಿಡುವೆನು. ನಾನು ಅವರನ್ನು ನಾಶಮಾಡುವೆನು.
ಆ ಸಮಯದಲ್ಲಿ ಅವರಿಗೆ ಸಹಾಯ ಮಾಡಲು
ನಾನು ಬರುವದಿಲ್ಲ. ಇಲ್ಲ! ನಾನು ಬಿಟ್ಟುಹೋಗು
ವುದನ್ನು ಅವರು ನೋಡುವರು.’’

## ಯೆರೆಮೀಯನ ನಾಲ್ಕನೇ ದೂರು

18 ಆಗ ಯೆರೆಮೀಯನ ವೈರಿಗಳು ಹೀಗೆಂದರು; ‘‘ಬನ್ನಿ
ನಾವು ಯೆರೆಮೀಯನ ವಿರುದ್ಧ ಒಳಸಂಚು ಮಾಡೋಣ.
ಯಾಜಕನಿಂದ ಧರ್ಮೋಪದೇಶವು ತಪ್ಪುವದಿಲ್ಲ, ಇದು
ಖಂಡಿತ. ಜ್ಞಾನಿಗಳಿಂದ ಮಂತ್ರಾಲೋಚನೆಯು ಇದ್ದೇ
ಇರುತ್ತದೆ. ದೈವೋಕ್ತಿಯು ಪ್ರವಾದಿಯಿಂದ ಎಂದಿಗೂ
ತಪ್ಪದು. ಆದುದರಿಂದ ಅವನ ಬಗ್ಗೆ ಸುಳ್ಳು ಹೇಳಿ ನಾಶ
ಮಾಡೋಣ. ಅವನು ಹೇಳುವ ಯಾವುದಕ್ಕೂ ನಾವು
ಗಮನಕೊಡಬೇಕಾಗಿಲ್ಲ.’’

19 ಯೆಹೋವನೇ, ನನ್ನ ಮಾತನ್ನು ಆಲಿಸು, ನನ್ನ
ವಾದವನ್ನು ಆಲಿಸಿ ಯಾರು ಹೇಳುವುದು ಸರಿ
ಎನ್ನುವದನ್ನು ನಿರ್ಣಯಿಸು.
20 ನಾನು ಯೆಹೂದದ ಜನರಿಗೆ ಒಳ್ಳೆಯದನ್ನು
ಮಾಡಿದೆನು. ಆದರೆ ಅವರೀಗ ನನಗೆ ಕೆಟ್ಟದ್ದನ್ನು
ಮಾಡುತ್ತಿದ್ದಾರೆ. ಈಗ ಅವರು ನನ್ನನ್ನು
ಕೊಲ್ಲುವುದಕ್ಕಾಗಿ ಒಂದು ಗುಂಡಿಯನ್ನು ತೋಡಿ
ದ್ದಾರೆ. ಯೆಹೋವನೇ, ನಾನು ಮಾಡಿದ್ದು ನಿನ್ನ
ಜ್ಞಾಪಕದಲ್ಲಿಯೇ? ನಾನು ನಿನ್ನ ಎದುರಿಗೆ ನಿಂತು
ಕೊಂಡು ಈ ಜನರಿಗೆ ಒಳ್ಳೆಯದನ್ನು ಮಾಡೆಂದೂ
ಅವರ ಮೇಲೆ ಕೋಪಗೊಳ್ಳಬಾರದೆಂದೂ ನಿನ್ನಲ್ಲಿ
ಕೇಳಿಕೊಂಡೆ.
21 ಆದುದರಿಂದ ಈಗ ಅವರ ಮಕ್ಕಳು ಕ್ಷಾಮಪೀಡಿತ
ರಾಗಿ ಉಪವಾಸ ಬೀಳುವಂತೆ ಮಾಡು. ಅವರ
ಶತ್ರುಗಳು ಅವರನ್ನು ಖಡ್ಗದಿಂದ ಸೋಲಿಸುವಂತೆ
ಮಾಡು. ಅವರ ಹೆಂಡಂದಿರು ಮಕ್ಕಳನ್ನು ಕಳೆದು
ಕೊಳ್ಳಲಿ ಮತ್ತು ವಿಧವೆಯರಾಗಲಿ. ಅವರ ಯೌವ
ನಸ್ಥರು ಯುದ್ಧದಲ್ಲಿ ಖಡ್ಗದಿಂದ ಹತರಾಗಲಿ.
22 ಅವರ ಮನೆಗಳಲ್ಲಿ ರೋದನದ ಧ್ವನಿ ಬರಲಿ.
ನೀನು ಫಕ್ಕನೆ ಅವರ ಮುಂದೆ ಶತ್ರುವನ್ನು ತಂದು
ನಿಲ್ಲಿಸಿದಾಗ ಅವರು ಅಳುವಂತಾಗಲಿ. ನನ್ನ ವೈರಿ
ಗಳು ನನ್ನನ್ನು ಬಲೆಯಲ್ಲಿ ಸಿಕ್ಕಿಸಬೇಕೆಂದು
ಪ್ರಯತ್ನ ಮಾಡಿದ್ದಾರೆ. ನಾನು ಸಿಕ್ಕಿಹಾಕಿ ಕೊಳ್ಳು
ವಂಥ ಮತ್ತು ನನ್ನ ಕಣ್ಣಿಗೆ ಕಾಣದ ಗುಪ್ತವಾದ
ಬಲೆಗಳನ್ನು ಅವರು ಹಾಕಿದ್ದಾರೆ.
23 ಯೆಹೋವನೇ, ನನ್ನನ್ನು ಕೊಲ್ಲಲು ಅವರು
ಹಾಕಿದ ಯೋಜನೆಗಳನ್ನೆಲ್ಲ ನೀನು ಬಲ್ಲೆ. ಅವರ
ಅಪರಾಧಗಳನ್ನು ಮನ್ನಿಸಬೇಡ. ಅವರ ಪಾಪಗ
ಳನ್ನು ಅಳಿಸಬೇಡ. ನನ್ನ ವೈರಿಗಳನ್ನು ನಾಶಪಡಿಸು,
ನೀನು ಕೋಪದಲ್ಲಿದ್ದಾಗ ಆ ಜನರನ್ನು ಶಿಕ್ಷಿಸು.

19 ಯೆಹೋವನು ನನಗೆ ಹೀಗೆ ಹೇಳಿದನು:
‘‘ಯೆರೆಮೀಯನೇ, ಒಬ್ಬ ಕುಂಬಾರನ ಹತ್ತಿರ
ಹೋಗಿ ಅವನಿಂದ ಒಂದು ಮಣ್ಣಿನ ಕೊಡವನ್ನು ಕೊಂಡು
ಕೊಂಡು 2 ಬೋಕಿಯ ದ್ವಾರದ* ಸಮೀಪದಲ್ಲಿರುವ
ಬೆನ್‌ಹಿನ್ನೋಮ್ ತಗ್ಗಿಗೆ ಹೋಗು. ನಿನ್ನ ಸಂಗಡ ಜನರ
ಹಿರಿಯರಲ್ಲಿ ಕೆಲವರನ್ನೂ ಯಾಜಕರ ಹಿರಿಯರಲ್ಲಿ
ಕೆಲವರನ್ನೂ ಕರೆದುಕೊಂಡು ಹೋಗು. ನಾನು ನಿನಗೆ
ಹೇಳುವುದನ್ನು ನೀನು ಅಲ್ಲಿ ಅವರಿಗೆ ಹೇಳು. 3 ನಿನ್ನ
ಜೊತೆಯಲ್ಲಿದ್ದ ಜನರಿಗೆ ಹೇಳು ‘ಯೆಹೂದದ ರಾಜನೇ,
ಜೆರುಸಲೇಮಿನ ಜನರೇ, ಯೆಹೋವನ ಈ ಸಂದೇಶ

---

**ಲೆಬನೋನಿನ … ಹೋಗುವುದೇ** ಇದು ಅರ್ಥೈಸಲು ಕಷ್ಟಕರವಾದ ವಚನ. ಅಕ್ಷರಶಃ ಲೆಬನೋನಿನ ಹಿಮವು ಶದ್ದಾಯ್ ಬಂಡೆಯಿಂದ ಎಂದಾದರೂ ಕರಗುವುದುಂಟೇ? ‘‘ಶದ್ದಾಯ್’’ ಮತ್ತು ‘‘ಬಂಡೆ’’ ದೇವರ ಹೆಸರುಗಳಾಗಿವೆ.

**ಬೋಕಿಯ ದ್ವಾರ** ಒಂದು ದ್ವಾರದ ಹೆಸರು.

ವನ್ನು ಕೇಳಿರಿ. ಇಸ್ರೇಲರ ದೇವರು ಸರ್ವಶಕ್ತನಾದ
ಯೆಹೋವನೂ ಹೀಗೆ ಹೇಳುತ್ತಾನೆ: ನಾನು ಈ ಸ್ಥಳಕ್ಕೆ
ಒಂದು ಭಯಂಕರವಾದ ಕೇಡನ್ನು ಉಂಟು ಮಾಡು
ವೆನು. ಅದರ ಬಗ್ಗೆ ಕೇಳಿದ ಪ್ರತಿಯೊಬ್ಬ ವ್ಯಕ್ತಿಯು
ವಿಸ್ಮಯ ಪಡುವನು ಮತ್ತು ಭಯಪಡುವನು.
4ಯೆಹೂದದ ಜನರು ನನ್ನ ಅನುಸರಣೆಯನ್ನು
ಬಿಟ್ಟದ್ದರಿಂದ ನಾನು ಹೀಗೆ ಮಾಡುವೆನು. ಇದನ್ನು
ಅವರು ಅನ್ಯದೇವರುಗಳ ಸ್ಥಳವನ್ನಾಗಿ ಮಾಡಿದ್ದಾರೆ.
ಯೆಹೂದದ ಜನರು ಈ ಸ್ಥಳ ದಲ್ಲಿ ಅನ್ಯದೇವರುಗಳಿಗಾಗಿ
ಧೂಪವನ್ನು ಹಾಕಿದ್ದಾರೆ. ಬಹಳ ಹಿಂದೆ ಈ ಜನರು ಆ
ದೇವರುಗಳನ್ನು ಪೂಜಿಸುತ್ತಿರಲಿಲ್ಲ. ಅವರ ಹಿರಿಯರೂ
ಆ ದೇವರುಗಳನ್ನು ಪೂಜಿಸುತ್ತಿರಲಿಲ್ಲ. ಇವುಗಳು ಅನ್ಯ
ದೇಶದ ಹೊಸ ದೇವರುಗಳು. ಯೆಹೂದದ ರಾಜರು ಈ
ಸ್ಥಳವನ್ನು ಮುಗ್ಧಮಕ್ಕಳ ರಕ್ತದಿಂದ ತುಂಬಿದರು.
5ಯೆಹೂದದ ರಾಜರು ಬಾಳ್ ದೇವರಿಗಾಗಿ ಉನ್ನತ
ವಾದ ಸ್ಥಳಗಳನ್ನು ಕಟ್ಟಿಸಿದರು. ಅವರು ಆ ಸ್ಥಳಗಳಲ್ಲಿ ತಮ್ಮ
ಗಂಡು ಮಕ್ಕಳನ್ನು ಹೋಮ ಮಾಡಿದರು. ಅವರು ಬಾಳ್
ದೇವರಿಗೆ ತಮ್ಮ ಗಂಡು ಮಕ್ಕಳನ್ನು ಆಹುತಿಕೊಟ್ಟರು.
ನಾನು ಹಾಗೆ ಮಾಡಲು ಅವರಿಗೆ ಹೇಳಿರಲಿಲ್ಲ. ನಿಮ್ಮ
ಗಂಡುಮಕ್ಕಳನ್ನು ಆಹುತಿಯಾಗಿ ಕೊಡಿ ಎಂದು ನಿಮಗೆ
ಹೇಳಲಿಲ್ಲ. ಅಂಥ ವಿಚಾರ ನನ್ನ ಮನಸ್ಸಿನಲ್ಲಿ ಬರಲೇ
ಇಲ್ಲ.

6ಈಗ, ಬೆತ್‌ಹಿನ್ನೋಮಿನ ಕಣಿವೆಯಲ್ಲಿದ್ದ ಈ
ಸ್ಥಳವನ್ನು ಜನರು 'ತೋಫೆತ್' ಎಂದು ಕರೆಯುತ್ತಾರೆ.
ಆದರೆ ಜನರು ಇದನ್ನು 'ಕೊಲೆಯ ಕಣಿವೆ' ಎಂದು
ಕರೆಯುವ ದಿನಗಳು ಬರುತ್ತಿವೆ ಎಂದು ನಾನು ನಿಮಗೆ
ಮುನ್ನೆಚ್ಚರಿಕೆಯನ್ನು ಕೊಡುತ್ತೇನೆ. ಇದು ಯೆಹೋವನ
ನುಡಿ. 7ಈ ಸ್ಥಳದಲ್ಲಿ ನಾನು ಯೆಹೂದದ ಮತ್ತು
ಜೆರುಸಲೇಮಿನ ಜನರ ಯೋಜನೆಗಳನ್ನು ಹಾಳು
ಮಾಡುತ್ತೇನೆ. ಶತ್ರುವು ಈ ಜನರನ್ನು ಬೆನ್ನಟ್ಟಿ ಬರುವನು.
ನಾನು ಈ ಸ್ಥಳದಲ್ಲಿ ಖಡ್ಗದಿಂದ ಯೆಹೂದದ ಜನರ
ಕೊಲೆಯಾಗುವಂತೆ ಮಾಡುವೆನು. ಅವರ ಹೆಣಗಳು ಪಕ್ಷಿ
ಗಳಿಗೆ ಮತ್ತು ಕಾಡು ಪ್ರಾಣಿಗಳಿಗೆ ಆಹಾರವಾಗುವಂತೆ
ಮಾಡುವೆನು. 8ನಾನು ಈ ನಗರವನ್ನು ಸಂಪೂರ್ಣವಾಗಿ
ನಾಶಮಾಡುತ್ತೇನೆ. ಜೆರುಸಲೇಮಿನಿಂದ ಹಾದು
ಹೋಗುವಾಗ ಜನರು ಸಿಳ್ಳುಹಾಕಿ ತಲೆಯಾಡಿಸಿ ಹೋಗು
ವರು. ನಗರವು ಹಾಳಾಗಿರುವುದನ್ನು ಕಂಡು ಅವರು
ಬೆರಗಾಗುವರು.

9ಶತ್ರುವು ನಗರದ ಸುತ್ತಲೂ ತನ್ನ ಸೈನ್ಯವನ್ನು ತರುವನು.
ಜನರು ಆಹಾರವನ್ನು ಶೇಖರಿಸಲು ಹೊರಗೆ ಹೋಗ
ದಂತೆ ಆ ಸೈನ್ಯವು ತಡೆಯುವದು. ನಗರದಲ್ಲಿದ್ದ ಜನರು
ಉಪವಾಸ ಬೀಳುವರು. ಅವರು ಹಸಿವು ತಾಳಲಾರದೆ
ತಮ್ಮ ಮಕ್ಕಳನ್ನೇ ತಿನ್ನುವರು. ಆಮೇಲೆ ಅವರು ಒಬ್ಬರ
ನ್ನೊಬ್ಬರು ತಿನ್ನಲು ಪ್ರಾರಂಭಿಸುವರು.'

10"ಯೆರೆಮೀಯನೇ, ನೀನು ಜನರಿಗೆ ಆ ವಿಷಯ
ಗಳನ್ನು ಹೇಳು. ಅವರು ಗಮನವಿಟ್ಟು ಕೇಳುತ್ತಿರುವಾಗ
ಆ ಮಣ್ಣಿನ ಕೊಡವನ್ನು ಒಡೆದು ಹಾಕಿ 11ಹೀಗೆ ಹೇಳು:
'ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ: 'ಈ
ಮಣ್ಣಿನ ಕೊಡವನ್ನು ಒಡೆದುಹಾಕಿದಂತೆ ನಾನು
ಯೆಹೂದ ಜನಾಂಗವನ್ನು ಮತ್ತು ಜೆರುಸಲೇಮ್ ನಗರ
ವನ್ನು ಒಡೆದುಹಾಕುವೆನು. ಈ ಕೊಡವನ್ನು ಪುನಃ
ಜೋಡಿ ಸಲು ಸಾಧ್ಯವಿಲ್ಲ. ಯೆಹೂದ ಜನಾಂಗದ
ಸ್ಥಿತಿಯೂ ಹೀಗೆಯೇ ಆಗುವುದು. ತೋಫೆತಿನಲ್ಲಿ
ಸ್ಥಳವಿಲ್ಲದಂತಾಗುವವರೆಗೂ ಸತ್ತವರನ್ನು ಅಲ್ಲಿ ಹೂಳ
ಲಾಗುವುದು. 12ನಾನು ಈ ಜನರಿಗೂ ಮತ್ತು ಈ ಸ್ಥಳಕ್ಕೂ
ಹೀಗೆ ಮಾಡುತ್ತೇನೆ. ನಾನು ಈ ನಗರವನ್ನು
ತೋಫೆತಿನಂತೆ ಮಾಡುತ್ತೇನೆ' ಇದು ಯೆಹೋವನ ನುಡಿ.
13'ಜೆರುಸಲೇಮಿನ ಮನೆಗಳು ಈ ತೋಫೆತಿನಷ್ಟೆ
'ಹೊಲಸಾಗುವವು.' ಯೆಹೂದದ ರಾಜರ ಅರಮನೆಗಳು
ಈ ತೋಫೆತಿನಂತೆ ಹಾಳಾಗುವವು. ಏಕೆಂದರೆ ಜನರು
ತಮ್ಮ ಮನೆಯ ಮಾಳಿಗೆಯ ಮೇಲೆ ಸುಳ್ಳು ದೇವರು
ಗಳನ್ನು ಪೂಜಿಸಿದರು. ಅವರು ನಕ್ಷತ್ರಗಳನ್ನು ಪೂಜಿಸಿ
ಅವುಗಳ ಗೌರವಾರ್ಥವಾಗಿ ಧೂಪಹಾಕಿದರು. ಅವರು
ಸುಳ್ಳು ದೇವರುಗಳಿಗೆ ಪಾನನೈವೇದ್ಯವನ್ನು
ಅರ್ಪಿಸಿದರು.'''

14ಯೆರೆಮೀಯನು ಯೆಹೋವನ ಅಪ್ಪಣೆಯಂತೆ
ತೋಫೆತಿನಲ್ಲಿ ಪ್ರವಾದಿಸಿದ ಮೇಲೆ ಅಲ್ಲಿಂದ ಬಂದು
ಪವಿತ್ರಾಲಯದ ಪ್ರಾಕಾರದಲ್ಲಿ ನಿಂತುಕೊಂಡು, ಎಲ್ಲಾ
ಜನರನ್ನುದ್ದೇಶಿಸಿ ಹೀಗೆ ಹೇಳಿದನು: 15"ಇಸ್ರೇಲಿನ
ದೇವರೂ ಸರ್ವಶಕ್ತನೂ ಆಗಿರುವ ಯೆಹೋವನು ಹೀಗೆ
ಹೇಳುವನು: 'ನಾನು ಜೆರುಸಲೇಮಿಗೂ ಆದರ ಸುತ್ತಲಿನ
ಹಳ್ಳಿಗಳಿಗೂ ಅನೇಕ ವಿಪತ್ತುಗಳನ್ನು ಬರಮಾಡುವುದಾಗಿ
ಹೇಳಿದೆನು. ಅವುಗಳನ್ನು ಬೇಗನೆ ಬರಮಾಡುತ್ತೇನೆ.
ಏಕೆಂದರೆ ಜನರು ಬಹಳ ಮೊಂಡರಾಗಿದ್ದಾರೆ. ನಾನು
ಹೇಳಿದ್ದನ್ನು ಅವರು ಕೇಳುವುದೂ ಇಲ್ಲ, ಅನುಸರಿಸು
ವುದೂ ಇಲ್ಲ.''

### ಯೆರೆಮೀಯ ಮತ್ತು ಪಷ್ಹೂರನು

20 ಪಷ್ಹೂರನೆಂಬುವನು ಯಾಜಕನಾಗಿದ್ದನು.
ಅವನು ಯೆಹೋವನ ಆಲಯದ ಮುಖ್ಯಾಧಿ
ಕಾರಿಯಾಗಿದ್ದನು. ಪಷ್ಹೂರನು ಇಮ್ಮೇರನ ಮಗನು.
ಯೆಹೋವನ ಆಲಯದ ಪ್ರಾಕಾರದಲ್ಲಿ ಯೆರೆಮೀ
ಯನು ಮಾಡಿದ ಪ್ರವಾದನೆಯನ್ನು ಪಷ್ಹೂರನು ಕೇಳಿ
ದನು. 2ಅವನು ಪ್ರವಾದಿಯಾದ ಯೆರೆಮೀಯನನ್ನು

ಹೊಡೆಯಿಸಿ ಯೆಹೋವನ ಆಲಯಕ್ಕೆ ಸೇರಿದ ಮೇಲಣ
ಬೆನ್ಯಾಮೀನ್ ದ್ವಾರದಲ್ಲಿದ್ದ ಕೊಳಕ್ಕೆ ಹಾಕಿಸಿದನು.
[3]ಮರುದಿನ ಪಷ್ಹೂರನು ಯೆರೆಮೀಯನನ್ನು ಕೊಳ
ದಿಂದ ಬಿಡಿಸಿದನು. ಆಗ ಯೆರೆಮೀಯನು ಪಷ್ಹೂರನಿಗೆ
ಹೀಗೆ ಹೇಳಿದನು: ''ದೇವರು ನಿನ್ನನ್ನು ಪಷ್ಹೂರ್ ಎಂದು
ಹೇಳುವದಿಲ್ಲ. ಈಗ ಯೆಹೋವನು ನಿನಗಿಟ್ಟ ಹೆಸರು,
''ಪ್ರತಿಯೊಂದು ಭಾಗದಲ್ಲಿಯೂ ಭಯಂಕಾರಿ' [4]ಅದು
ನಿನ್ನ ಹೆಸರು. ಏಕೆಂದರೆ ಯೆಹೋವನು ಹೇಳುತ್ತಾನೆ:
ನಾನು ತಕ್ಷಣ ನಿನ್ನನ್ನು ನಿನಗೆ ಭಯಂಕಾರಿಯನ್ನಾಗಿ
ಮಾಡುವೆನು. ನಾನು ನಿನ್ನನ್ನು ನಿನ್ನ ಎಲ್ಲಾ ಸ್ನೇಹಿತರಿಗೆ
ಭಯಂಕಾರಿಯನ್ನಾಗಿ ಮಾಡುವೆನು. ವೈರಿಗಳು ಖಡ್ಗಗ
ಳಿಂದ ನಿನ್ನ ಸ್ನೇಹಿತರನ್ನು ಕೊಲ್ಲುವುದನ್ನು ನೀನು
ನೋಡುವೆ. ಯೆಹೂದದ ಎಲ್ಲಾ ಜನರನ್ನು ನಾನು ಬಾಬಿ
ಲೋನಿನ ರಾಜನಿಗೆ ಒಪ್ಪಿಸುವೆನು. ಅವನು ಯೆಹೂದ್ಯ
ರನ್ನು ಬಾಬಿಲೋನಿಗೆ ತೆಗೆದುಕೊಂಡು ಹೋಗುವನು:
ಅವನ ಸೈನಿಕರು ಯೆಹೂದ್ಯರನ್ನು ತಮ್ಮ ಕತ್ತಿಗಳಿಂದ
ಕೊಂದುಹಾಕುವರು. [5]ಸಂಪತ್ತನ್ನು ಸಂಗ್ರಹಿಸಿ ಸಿರಿವಂತ
ರಾಗಲು ಜೆರುಸಲೇಮಿನ ಜನರು ಬಹಳ ಕಷ್ಟಪಟ್ಟು ದುಡಿ
ದರು. ಆದರೆ ನಾನು ಅದೆಲ್ಲವನ್ನು ಅವರ ವೈರಿಗಳಿಗೆ
ಒಪ್ಪಿಸುವೆನು. ಜೆರುಸಲೇಮಿನ ರಾಜನ ಬಳಿ ಅನೇಕ
ನಿಧಿನಿಕ್ಷೇಪಗಳಿವೆ. ಆದರೆ ನಾನು ಆ ನಿಧಿನಿಕ್ಷೇಪಗಳ
ನ್ನೆಲ್ಲಾ ವೈರಿಗೆ ಒಪ್ಪಿಸುತ್ತೇನೆ. ವೈರಿಯು ಅವುಗಳನ್ನು
ಬಾಬಿಲೋನ್ ದೇಶಕ್ಕೆ ತೆಗೆದುಕೊಂಡು ಹೋಗುವನು.
[6]ಪಷ್ಹೂರನೇ, ನಿನ್ನನ್ನೂ, ನಿನ್ನ ಮನೆಯಲ್ಲಿರುವವರೆಲ್ಲ
ರನ್ನೂ ಬಲವಂತವಾಗಿ ಬಾಬಿಲೋನ್ ದೇಶಕ್ಕೆ ಸೆರೆ
ಒಯ್ಯಲಾಗುವುದು. ನೀನು ಬಾಬಿಲೋನ್‌ನಲ್ಲಿ ಮರಣ
ಹೊಂದುವೆ; ನಿನ್ನನ್ನು ಆ ಪರದೇಶದಲ್ಲಿಯೇ ಹೂಳಲಾ
ಗುವುದು. ನೀನು ನಿನ್ನ ಸ್ನೇಹಿತರಿಗೆ ಸುಳ್ಳುಬೋಧನೆ
ಯನ್ನು ಮಾಡಿದೆ. ಹೀಗಾಗುವುದಿಲ್ಲವೆಂದು ನೀನು
ಹೇಳಿದೆ. ಆದರೆ ನಿನ್ನೆಲ್ಲ ಸ್ನೇಹಿತರು ಸಹ ಸತ್ತು ಬಾಬಿಲೋ
ನಿನಲ್ಲಿ ಹೂಳಲ್ಪಡುವರು.'''

### ಯೆರೆಮೀಯನ ಐದನೆ ದೂರು

7 ಯೆಹೋವನೇ, ನೀನು ನನ್ನನ್ನು ಮರುಳುಗೊಳಿ
ಸಿದೆ, ನಿಜವಾಗಿಯೂ ನಾನು ಮರುಳಾದೆನು,
ನೀನು ನನಗಿಂತ ಬಲಿಷ್ಠನಾದುದರಿಂದ ಗೆದ್ದೆ.
ನಾನೊಂದು ತಮಾಷೆಯಾಗಿದ್ದೇನೆ. ಹಗಲೆಲ್ಲ
ಜನರು ನನ್ನನ್ನು ಕಂಡು ನಗುತ್ತಾರೆ. ನನ್ನನ್ನು ಗೇಲಿ
ಮಾಡುತ್ತಾರೆ.
8 ನಾನು ಮಾತನಾಡಿದಾಗಲೆಲ್ಲ ಕೂಗಿ ಕೂಗಿ ಹೇಳು
ತ್ತೇನೆ. ನಾನು ಯಾವಾಗಲೂ ಹಿಂಸೆ ಮತ್ತು ವಿನಾ
ಶದ ಬಗ್ಗೆ ಕೂಗಿಕೊಳ್ಳುತ್ತೇನೆ. ಯೆಹೋವನಿಂದ
ಬಂದ ಸಂದೇಶದ ಬಗ್ಗೆ ಜನರಿಗೆ ಹೇಳುತ್ತೇನೆ.
ಆದರೆ ಜನರು ಯಾವಾಗಲೂ ನನಗೆ ಅವಮಾನ
ಮಾಡುತ್ತಾರೆ. ನನ್ನನ್ನು ಗೇಲಿ ಮಾಡುತ್ತಾರೆ.
9 ಒಮ್ಮೊಮ್ಮೆ ನನ್ನಷ್ಟಕ್ಕೆ ನಾನೇ ಹೇಳಿಕೊಳ್ಳುತ್ತೇನೆ,
''ನಾನು ಯೆಹೋವನನ್ನೇ ಮರೆತುಬಿಡುತ್ತೇನೆ.
ಆತನ ಹೆಸರಿನಲ್ಲಿ ಇನ್ನೇನೂ ಮಾತನಾಡುವು
ದಿಲ್ಲ'' ಎಂದುಕೊಂಡರೆ ಆತನ ಸಂದೇಶವು ನನ್ನ
ಅಂತರಾಳದಲ್ಲಿ ಉರಿಯುವ ಜ್ವಾಲೆಯಂತಾಗು
ತ್ತದೆ. ಅದು ಆಳಕ್ಕೆ ಇಳಿದು ನನ್ನ ಎಲುಬುಗಳನ್ನು
ಸುಡುವಂತಾಗುತ್ತದೆ. ಯೆಹೋವನ ಸಂದೇಶ
ವನ್ನು ನನ್ನ ಅಂತರಾಳದಲ್ಲಿ ಹಿಡಿದಿಟ್ಟುಕೊಳ್ಳಲು
ಪ್ರಯತ್ನ ಮಾಡಿ ನಾನು ದಣಿಯುತ್ತೇನೆ. ಕೊನೆಗೆ
ಅದನ್ನು ನನ್ನೊಳಗೆ ಇಟ್ಟುಕೊಳ್ಳಲು ಅಸಾಧ್ಯ
ವಾಗುತ್ತದೆ.
10 ಅನೇಕ ಜನರು ನನ್ನ ವಿರುದ್ಧವಾಗಿ ಮೆಲುಧ್ವನಿ
ಯಲ್ಲಿ ಮಾತನಾಡುವದು ನನ್ನ ಕಿವಿಗೆ ಬೀಳುತ್ತಿದೆ,
ಅದು ನನ್ನನ್ನು ಭಯಗೊಳಿಸುತ್ತಿದೆ. ನನ್ನ ಸ್ನೇಹಿ
ತರು ಸಹ ನನ್ನ ವಿರುದ್ಧ ಮಾತನಾಡುತ್ತಿದ್ದಾರೆ.
ನಾನು ಯಾವುದಾದರೂ ತಪ್ಪನ್ನು ಮಾಡಲಿ ಎಂದು
ಜನರು ಹೊಂಚುಹಾಕಿ ಕಾದಿದ್ದಾರೆ. ''ಅವನು
ದುಷ್ಕಾರ್ಯವನ್ನು ಮಾಡಿದ್ದಾನೆಂದು ನಾವು ಸುಳ್ಳು
ಹೇಳೋಣ. ಯೆರೆಮೀಯನನ್ನು ನಾವು ವಂಚಿ
ಸಲು ಸಾಧ್ಯವಾಗಬಹುದು. ನಾವು ಅವನನ್ನು
ಹಿಡಿದುಕೊಳ್ಳಬಹುದು. ಕೊನೆಗೆ ಅವನನ್ನು
ತೊಲಗಿಸಬಹುದು. ನಾವು ಅವನನ್ನು ಹಿಡಿದು
ಅವನ ಮೇಲೆ ನಮ್ಮ ಸೇಡನ್ನು ತೀರಿಸಿ
ಕೊಳ್ಳೋಣ'' ಎಂದು ಮಾತನಾಡುತ್ತಿದ್ದಾರೆ.
11 ಆದರೆ ಯೆಹೋವನು ನನ್ನೊಡನಿದ್ದಾನೆ.
ಯೆಹೋವನು ಒಬ್ಬ ಶೂರ ಯೋಧನಂತಿದ್ದಾನೆ.
ಆದುದರಿಂದ ನನ್ನನ್ನು ಬೆನ್ನಟ್ಟಿಕೊಂಡು ಬರುತ್ತಿದ್ದ
ಜನರು ಬೀಳುತ್ತಾರೆ. ಅವರು ನನ್ನನ್ನು ಸೋಲಿಸ
ಲಾರರು. ಆ ಜನರು ಸೋತುಹೋಗುತ್ತಾರೆ. ಅವ
ರಿಗೆ ಆಶಾಭಂಗವಾಗುತ್ತದೆ. ಅವರಿಗೆ ನಾಚಿಕೆ
ಯಾಗುತ್ತದೆ. ಅವರು ಆ ನಾಚಿಕೆಯನ್ನು ಎಂದೂ
ಮರೆಯಲಾರರು.
12 ಸರ್ವಶಕ್ತನಾದ ಯೆಹೋವನೇ, ನೀನು ಒಳ್ಳೆಯವ
ರನ್ನು ಪರೀಕ್ಷಿಸುವೆ. ನೀನು ಒಬ್ಬ ವ್ಯಕ್ತಿಯ ಹೃದಯ
ವನ್ನು ಮತ್ತು ಬುದ್ಧಿಯನ್ನು ಆಳವಾಗಿ ಪರೀಕ್ಷಿಸಿ
ನೋಡುವೆ. ನಾನು ಅವರ ವಿರುದ್ಧ ನನ್ನ ಅಭಿ
ಪ್ರಾಯಗಳನ್ನು ನಿನಗೆ ತಿಳಿಸಿದ್ದೇನೆ. ನೀನು ಅವರಿಗೆ
ತಕ್ಕ ಶಿಕ್ಷೆಯನ್ನು ವಿಧಿಸಿರುವದನ್ನು ನನ್ನ ಕಣ್ಣುಗಳು
ನೋಡಲಿ.

13 ಯೆಹೋವನನ್ನು ಕೀರ್ತಿಸಿರಿ, ಯೆಹೋವನನ್ನು
ಸ್ತುತಿಸಿರಿ. ಯೆಹೋವನು ಬಡಜನರ ಪ್ರಾಣ
ಗಳನ್ನು ಉಳಿಸುತ್ತಾನೆ. ಅವನು ಅವರನ್ನು ದುಷ್ಟರ
ದೌರ್ಜನ್ಯದಿಂದ ರಕ್ಷಿಸುತ್ತಾನೆ.

### ಯೆರೆಮೀಯನ ಆರನೇ ದೂರು

14ನಾನು ಹುಟ್ಟಿದ ದಿನವು ಶಾಪಗ್ರಸ್ತವಾಗಲಿ;
ತಾಯಿಯು ನನ್ನನ್ನು ಹೆತ್ತ ದಿನವು ಶುಭವೆನಿಸಿ
ಕೊಳ್ಳದಿರಲಿ.
15“ನಿನಗೆ ಗಂಡು ಮಗು ಹುಟ್ಟಿದೆ” ಎಂಬ ಸಮಾಚಾರ
ವನ್ನು ನನ್ನ ತಂದೆಗೆ ತಿಳಿಸಿ ಅವನಿಗೆ ಅತ್ಯಾನಂದವನ್ನು
ಉಂಟುಮಾಡಿದವನು ಶಪಿಸಲ್ಪಡಲಿ. 16ಯೆಹೋವನು
ಕನಿಕರಪಡದೆ ಕೆಡವಿಬಿಟ್ಟ ನಗರಗಳ ಗತಿಯು ಅವನಿಗೆ
ಬರಲಿ. ಬೆಳಿಗ್ಗೆ ಯುದ್ಧದ ಕೂಗಾಟವೂ, ಮಧ್ಯಾಹ್ನದಲ್ಲಿ
ಯುದ್ಧದ ಕಿರುಚಾಟವೂ ಅವನ ಕಿವಿಗೆ ಬೀಳಲಿ.
17ಯಾಕೆ ಆ ಮನುಷ್ಯನು ನಾನು ನನ್ನ ತಾಯಿಯ
ಗರ್ಭದಲ್ಲಿದ್ದಾಗಲೇ ನನ್ನನ್ನು ಕೊಲ್ಲಲಿಲ್ಲ. ಆಗ ಅವನು
ನನ್ನನ್ನು ಕೊಂದಿದ್ದರೆ ನನ್ನ ತಾಯಿಯೇ ನನಗೆ ಗೋರಿ
ಯಾಗುತ್ತಿದ್ದಳು. ನಾನೆಂದೂ ಹುಟ್ಟುತ್ತಲೇ ಇರಲಿಲ್ಲ.
18ನಾನು ಗರ್ಭದಿಂದ ಏಕೆ ಹೊರಬರಬೇಕಿತ್ತು?
ನಾನು ಕಷ್ಟವನ್ನು ಮತ್ತು ದುಃಖವನ್ನು ಕಂಡಿರುವೆನಷ್ಟೇ.
ನನ್ನ ಜೀವನವು ನಾಚಿಕೆಯಲ್ಲಿಯೇ ಕೊನೆಗೊಳ್ಳುವುದು.

### ದೇವರು ರಾಜನಾದ ಚಿದ್ಕೀಯನ ಪ್ರಾರ್ಥನೆಯನ್ನು ತಿರಸ್ಕರಿಸಿದನು

21 ಯೆಹೋವನಿಂದ ಯೆರಮೀಯನಿಗೆ ಈ
ಸಂದೇಶ ಬಂದಿತು. ಯೆಹೂದದ ರಾಜನಾದ
ಚಿದ್ಕೀಯನು ಪಷ್ಹೂರನೆಂಬುವನನ್ನೂ ಯಾಜಕ ಚೆಫನ್ಯ
ನನ್ನೂ ಯೆರೆಮೀಯನ ಬಳಿಗೆ ಕಳುಹಿಸಿದಾಗ ಈ
ಸಂದೇಶ ಬಂದಿತು. ಪಷ್ಹೂರನು ಮಲ್ಕೀಯನ ಮಗ.
ಚೆಫನ್ಯನು ಮಾಸೇಯನ ಮಗ. ಪಷ್ಹೂರ ಮತ್ತು
ಚೆಫನ್ಯರು ಯೆರೆಮೀಯನಿಗೆ ರಾಜನ ಸಂದೇಶವನ್ನು
ತಂದಿದ್ದರು. 2ಪಷ್ಹೂರ ಮತ್ತು ಚೆಫನ್ಯರು ಹೀಗೆಂದರು:
“ನಮಗೋಸ್ಕರ ಯೆಹೋವನನ್ನು ಪ್ರಾರ್ಥಿಸಿ ಮುಂದೆ
ಸಂಭವಿಸುವುದನ್ನು ವಿಚಾರಿಸು. ಬಾಬಿಲೋನಿನ ರಾಜ
ನಾದ ನೆಬೂಕದ್ನೆಚ್ಚರನು ನಮಗೆ ವಿರುದ್ಧವಾಗಿ ಯುದ್ಧ
ಮಾಡುತ್ತಿರುವನು; ಆದುದರಿಂದ ಮುಂದೆ ಸಂಭವಿಸುವು
ದನ್ನು ನಾವು ತಿಳಿಯಬಯಸುತ್ತೇವೆ. ಮೊದಲಿನಂತೆ
ಯೆಹೋವನು ನಮಗೋಸ್ಕರ ಅದ್ಭುತಗಳನ್ನೂ ಮಾಡ
ಬಹುದು. ನೆಬೂಕದ್ನೆಚ್ಚರನು ನಮ್ಮ ಮೇಲೆ ಧಾಳಿ
ಮಾಡುವದನ್ನು ನಿಲ್ಲಿಸಿ ಹೊರಟು ಹೋಗುವಂತೆ ಆತನು
ಮಾಡ ಬಹುದು.”

3ಆಗ ಯೆರೆಮೀಯನು ಪಷ್ಹೂರ ಮತ್ತು ಚೆಫನ್ಯರಿಗೆ
ಹೀಗೆ ಉತ್ತರಕೊಟ್ಟನು: “ರಾಜನಾದ ಚಿದ್ಕೀಯನಿಗೆ
ಹೇಳಿರಿ. 4ಇಸ್ರೇಲಿನ ದೇವರಾದ ಯೆಹೋವನು ಹೀಗೆ
ಹೇಳುತ್ತಾನೆ, ‘ನಿಮ್ಮ ಕೈಯಲ್ಲಿ ಯುದ್ಧದ ಆಯುಧಗಳಿವೆ.
ಆ ಆಯುಧಗಳನ್ನು ನೀವು ನಿಮ್ಮ ರಕ್ಷಣೆಗಾಗಿಯೂ
ಬಾಬಿಲೋನಿನ ರಾಜನ ವಿರುದ್ಧವಾಗಿಯೂ ಮತ್ತು
ಬಾಬಿಲೋನಿನ ಜನರ ವಿರುದ್ಧವಾಗಿಯೂ ಬಳಸುತ್ತಿ
ದ್ದೀರಿ. ಆದರೆ ನಾನು ಆಯುಧಗಳನ್ನು ವಿಫಲ
ಗೊಳಿಸುತ್ತೇನೆ.
“‘ಬಾಬಿಲೋನಿನ ಸೈನ್ಯವು ನಗರದ ಸುತ್ತಲಿನ ಪೌಳಿ
ಗೋಡೆಯ ಬಳಿಯಿದೆ. ತಕ್ಷಣವೇ ನಾನು ಆ ಸೈನ್ಯವನ್ನು
ಜೆರುಸಲೇಮಿನ ಒಳಗಡೆ ತರುತ್ತೇನೆ. 5ಯೆಹೂದಿಗಳಾದ
ನಿಮ್ಮ ವಿರುದ್ಧ ನಾನೇ ಕಾದಾಡುತ್ತೇನೆ. ನಾನು ನನ್ನ
ಬಲಿಷ್ಠವಾದ ಕೈಗಳಿಂದ ನಿಮ್ಮ ವಿರುದ್ಧ ಹೋರಾಡುತ್ತೇನೆ.
ನಿಮ್ಮ ಮೇಲೆ ನನಗೆ ಬಹಳ ಕೋಪ ಬಂದಿದೆ; ಅದಕ್ಕಾಗಿ
ನನ್ನ ಬಲಿಷ್ಠವಾದ ತೋಳಿನಿಂದ ನಾನು ನಿಮ್ಮ ಸಂಗಡ
ಯುದ್ಧ ಮಾಡುತ್ತೇನೆ. ನಾನು ನಿಮ್ಮ ವಿರುದ್ಧ ಬಹಳ
ರಭಸದಿಂದ ಯುದ್ಧಮಾಡಿ ನನಗೆ ಎಷ್ಟು ಕೋಪ
ಬಂದಿದೆ; ಎಂಬುದನ್ನು ತೋರಿಸುತ್ತೇನೆ. 6ಜೆರುಸಲೇಮಿ
ನಲ್ಲಿ ವಾಸಮಾಡುತ್ತಿರುವ ಜನರನ್ನು ನಾನು ಕೊಂದು
ಬಿಡುತ್ತೇನೆ. ನಾನು ಜನರನ್ನು ಮತ್ತು ಪ್ರಾಣಿಗಳನ್ನು
ಕೊಲ್ಲುತ್ತೇನೆ. ಅವರುಗಳು ನಗರದಲ್ಲೆಲ್ಲಾ ಹರಡಿದ
ಭಯಂಕರವಾದ ರೋಗದಿಂದ ಮಡಿಯುವರು.” ಇದು
ಯೆಹೋವನ ನುಡಿ. 7ಇದಾದ ಮೇಲೆ ನಾನು
ಯೆಹೂದದ ರಾಜನಾದ ಚಿದ್ಕೀಯನನ್ನು ಮತ್ತು ಅಧಿಪತಿ
ಗಳನ್ನು ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನಿಗೆ
ಒಪ್ಪಿಸುತ್ತೇನೆ. ಜೆರುಸಲೇಮಿನ ಕೆಲವು ಜನರು
ಭಯಂಕರವಾದ ರೋಗದಿಂದ ಸಾಯುವುದಿಲ್ಲ; ಕೆಲವು
ಜನರು ಖಡ್ಗಗಳಿಗೆ ಆಹುತಿಯಾಗುವದಿಲ್ಲ; ಕೆಲವರು
ಹಸಿವಿನಿಂದ ಸಾಯುವುದಿಲ್ಲ. ಅಂಥವರನ್ನು ನಾನು
ನೆಬೂಕದ್ನೆಚ್ಚರನಿಗೆ ಕೊಡುತ್ತೇನೆ. ಯೆಹೂದದ ವೈರಿಯು
ಗೆಲ್ಲುವಂತೆ ನಾನು ಮಾಡುತ್ತೇನೆ. ನೆಬೂಕದ್ನೆಚ್ಚರನ
ಸೈನಿಕರು ಯೆಹೂದ್ಯರನ್ನು ಕೊಲ್ಲಬಯಸುತ್ತಾರೆ. ಆದುದ
ರಿಂದ ಯೆಹೂದ ಮತ್ತು ಜೆರುಸಲೇಮಿನ ಜನರು ಖಡ್ಗ
ಗಳಿಗೆ ಬಲಿಯಾಗುವರು. ನೆಬೂಕದ್ನೆಚ್ಚರನು ಸ್ವಲ್ಪವೂ
ದಯೆ ತೋರುವದಿಲ್ಲ. ಆ ಜನರ ಸಲುವಾಗಿ ಅವನು
ಮರುಗುವದಿಲ್ಲ.’
8“ಜೆರುಸಲೇಮಿನ ಜನರಿಗೆ ಇದನ್ನು ಸಹ ಹೇಳಿರಿ.
ಯೆಹೋವನು ಹೀಗೆನ್ನುತ್ತಾನೆ, ‘ನಾನು ನಿಮಗೆ ಜೀವವ
ನ್ನಾಗಲೀ ಮರಣವನ್ನಾಗಲೀ ಆರಿಸಿಕೊಳ್ಳಲು ಅವಕಾಶ
ಕೊಟ್ಟಿದ್ದೇನೆ ಎಂಬುದನ್ನು ತಿಳಿದುಕೊಳ್ಳಿರಿ. 9ಜೆರುಸ
ಲೇಮಿನಲ್ಲಿ ಉಳಿಯುವವನು ಮರಣಹೊಂದುವನು.

ಆತನು ಖಡ್ಗದಿಂದಾಗಲೀ, ಹಸಿವಿನಿಂದಾಗಲೀ, ಭಯಂ
ಕರವಾದ ರೋಗದಿಂದಾಗಲೀ ಮಡಿಯುವನು. ಆದರೆ
ಜೆರುಸಲೇಮಿನಿಂದ ಹೊರಗೆ ಬಾಬಿಲೋನಿನ ಸೈನಿಕರಿಗೆ
ಶರಣಾಗತನಾದವನು ಬದುಕುವನು. ಆ ಸೈನಿಕರು ನಗರ
ವನ್ನು ಮುತ್ತಿದ್ದಾರೆ. ಯಾರೂ ನಗರದಲ್ಲಿ ಆಹಾರವನ್ನು
ತರುವಂತಿಲ್ಲ. ಆದರೆ ನಗರವನ್ನು ಬಿಟ್ಟು ಹೊರಗೆ
ಹೋದವರು ಬದುಕುವರು. [10]ಜೆರುಸಲೇಮ್ ನಗರಕ್ಕೆ
ತೊಂದರೆಯನ್ನು ಉಂಟುಮಾಡಬೇಕೆಂದು ನಾನು ನಿಶ್ಚ
ಯಿಸಿದ್ದೇನೆ. ನಾನು ಈ ನಗರಕ್ಕೆ ಸಹಾಯ ಮಾಡುವ
ದಿಲ್ಲ.''' ಇದು ಯೆಹೋವನಿಂದ ಬಂದ ಸಂದೇಶ.
'''ಜೆರುಸಲೇಮ್ ನಗರವನ್ನು ನಾನು ಬಾಬಿಲೋನಿನ
ರಾಜನಿಗೆ ಒಪ್ಪಿಸುತ್ತೇನೆ. ಅವನು ಅದನ್ನು ಬೆಂಕಿಯಿಂದ
ಸುಟ್ಟುಹಾಕುತ್ತಾನೆ.'

11 ''ಯೆಹೂದದ ರಾಜಮನೆತನದವರಿಗೆ ಈ ವಿಷಯ
ಗಳನ್ನು ತಿಳಿಸಿರಿ, ಯೆಹೋವನ ಸಂದೇಶವನ್ನು
ಕೇಳಿರಿ.
12 ದಾವೀದನ ಮನೆತನದವರೇ, ಯೆಹೋವನು
ಹೀಗೆ ಹೇಳುತ್ತಾನೆ: 'ನೀವು ಪ್ರತಿದಿನ ನಿಷ್ಪಕ್ಷಪಾತ
ವಾಗಿ ನ್ಯಾಯನಿರ್ಣಯ ಮಾಡಬೇಕು. ಅಪರಾಧಿ
ಗಳಿಂದ ಕಷ್ಟಕ್ಕೊಳಗಾದವರನ್ನು ರಕ್ಷಿಸಬೇಕು.
ನೀವು ಹಾಗೆ ಮಾಡದಿದ್ದರೆ ನನಗೆ ಬಹಳ ಕೋಪ
ಬರುತ್ತದೆ. ನನ್ನ ಕೋಪವು ಯಾರಿಂದಲೂ ನಂದಿ
ಸಲಾಗದ ಬೆಂಕಿಯಂತಿದೆ. ನೀವು ದುಷ್ಕೃತ್ಯಗಳನ್ನು
ಮಾಡಿದ್ದರಿಂದ ಹೀಗಾಗುತ್ತದೆ.'
13 ''ಜೆರುಸಲೇಮ್ ನಗರವೇ, ನಾನು ನಿನ್ನ ವಿರುದ್ಧ
ವಾಗಿದ್ದೇನೆ. ನೀನು ಬೆಟ್ಟದ ಮೇಲೆ ಕುಳಿತಿರುವೆ,
ನೀನು ರಾಣಿಯಂತೆ ಈ ಕಣಿವೆಯ ಮೇಲೆ ಕುಳಿತಿ
ರುವೆ. 'ನಮ್ಮ ಮೇಲೆ ಯಾರೂ ಧಾಳಿ ಮಾಡ
ಲಾರರು, ನಮ್ಮ ಭದ್ರವಾದ ನಗರವನ್ನು ಯಾರೂ
ಪ್ರವೇಶ ಮಾಡಲಾರರು' ಎಂದು ಜೆರುಸಲೇಮಿನ
ನಿವಾಸಿಗಳಾದ ನೀವು ಹೇಳುವಿರಿ. ಆದರೆ
ಯೆಹೋವನ ಸಂದೇಶವನ್ನು ಕೇಳಿರಿ.
14 'ನೀವು ತಕ್ಕ ಶಿಕ್ಷೆಯನ್ನು ಅನುಭವಿಸುವಿರಿ. ನಾನು
ನಿಮ್ಮ ಅರಣ್ಯಗಳಲ್ಲಿ ಬೆಂಕಿಯನ್ನು ಹೊತ್ತಿಸುತ್ತೇನೆ.
ಆ ಬೆಂಕಿಯು ನಿಮ್ಮ ಸುತ್ತಮುತ್ತಲಿನ ಪ್ರತಿ
ಯೊಂದು ವಸ್ತುವನ್ನು ಸುಟ್ಟುಹಾಕುತ್ತದೆ.'''

### ದುಷ್ಟರಾಜರ ವಿರುದ್ಧ ನ್ಯಾಯನಿರ್ಣಯ

22 ಯೆಹೋವನು ಹೇಳಿದನು: ''ಯೆರೆಮೀ
ಯನೇ, ರಾಜನ ಅರಮನೆಗೆ ಹೋಗು. ಯೆಹೂ
ದದ ರಾಜನ ಬಳಿಗೆ ಹೋಗಿ ಅಲ್ಲಿ ಈ ಸಂದೇಶವನ್ನು
ಸಾರು. [2]''ಯೆಹೂದದ ರಾಜನೇ, ಯೆಹೋವನಿಂದ
ಬಂದ ಸಂದೇಶವನ್ನು ಕೇಳು. ನೀನು ದಾವೀದನ ಸಿಂಹಾಸ
ನಾರೂಢನಾಗಿ ರಾಜ್ಯಭಾರ ಮಾಡುವೆ, ಅದಕ್ಕಾಗಿ ಕೇಳು.
ರಾಜನೇ, ನೀನು ಮತ್ತು ನಿನ್ನ ಅಧಿಕಾರಿಗಳು ಚೆನ್ನಾಗಿ
ಕೇಳ ಬೇಕು. ಜೆರುಸಲೇಮಿನ ದ್ವಾರಗಳ ಮೂಲಕ
ಬರುವ ನಿನ್ನ ಜನರೆಲ್ಲರೂ ಯೆಹೋವನ ಸಂದೇಶವನ್ನು
ಕೇಳಬೇಕು. [3]ಯೆಹೋವನು ಅನ್ನುತ್ತಾನೆ, ನಿಮ್ಮ
ಆಚರಣೆ ನೀತಿಬದ್ಧವಾಗಿಯೂ ನ್ಯಾಯಬದ್ಧವಾಗಿಯೂ
ಇರಲಿ. ಸುಲಿಗೆ ಗೀಡಾದವರನ್ನು ದೋಚಿಕೊಂಡವನಿಂದ
ರಕ್ಷಿಸಿರಿ. ಅನಾಥರನ್ನು ಮತ್ತು ವಿಧವೆಯರನ್ನು ಹಿಂಸಿಸ
ಬೇಡಿ; ನಿರಾಪರಾಧಿಗಳನ್ನು ಕೊಲ್ಲಬೇಡಿ. [4]ನೀವು ಈ
ಆಜ್ಞೆಗಳನ್ನು ಪಾಲಿಸಿದರೆ ದಾವೀದನ ಸಿಂಹಾಸನಾರೂಢ
ರಾದ ರಾಜರು ಈ ದ್ವಾರಗಳಿಂದ ಜೆರುಸಲೇಮ್
ನಗರವನ್ನು ಪ್ರವೇಶಿಸುವುದು ಮುಂದುವರೆಯುತ್ತದೆ. ಆ
ರಾಜರು ತಮ್ಮ ಅಧಿಕಾರಿಗಳೊಂದಿಗೆ ಈ ದ್ವಾರಗಳಿಂದ
ಬರುತ್ತಾರೆ. ಆ ಆರಸರು ಅವರ ಅಧಿಕಾರಿಗಳು, ಅವರ
ಜನರು ರಥಗಳಲ್ಲಿ ಮತ್ತು ಕುದುರೆಗಳ ಮೇಲೆ
ಕುಳಿತುಕೊಂಡು ಬರುವರು. [5]ನೀವು ಈ ಆಜ್ಞೆಗಳನ್ನು
ಪಾಲಿಸದಿದ್ದರೆ ರಾಜನ ಅರಮನೆಯನ್ನು ನಾಶಮಾಡ
ಲಾಗುವುದು. ಅದು ಕಲ್ಲುಬಂಡೆಗಳ ರಾಶಿಯಾಗುವ
ದೆಂದು ಯೆಹೋವನಾದ ನಾನು ಆಣೆಯಿಟ್ಟು ಕೊಂಡು
ಹೇಳುತ್ತೇನೆ'' ಎಂದು ಯೆಹೋವನು ನುಡಿದನು.
[6]ಯೆಹೂದದ ರಾಜನು ವಾಸಮಾಡುವ ಅರಮನೆಯ
ಬಗ್ಗೆ ಯೆಹೋವನು ಹೀಗನ್ನುತ್ತಾನೆ,

''ಈ ಅರಮನೆಯು ಗಿಲ್ಯಾದಿನ ಅರಣ್ಯದಂತೆ ಲೆಬ
ನೋನಿನ ಪರ್ವತದಂತೆ ಎತ್ತರವಾಗಿದೆ. ಆದರೆ
ನಾನು ಅದನ್ನು ನಿಜವಾಗಿ ಮರುಭೂಮಿಯಂತೆ
ಮಾಡುತ್ತೇನೆ. ಈ ಅರಮನೆಯು ಹಾಳುಬಿದ್ದ
ನಗರದಂತಾಗುವುದು.
7 ಅರಮನೆಯನ್ನು ಹಾಳುಮಾಡಲು ನಾನು ಜನ
ರನ್ನು ಕಳುಹಿಸುತ್ತೇನೆ. ಪ್ರತಿಯೊಬ್ಬನ ಹತ್ತಿರ ಆ
ಮನೆಯನ್ನು ಹಾಳು ಮಾಡಲು ಬೇಕಾಗುವ
ಸಾಧನಗಳಿರುವವು. ಆ ಜನರು ನಿನ್ನ ಸುಂದರ
ವಾದ ಮತ್ತು ಗಟ್ಟಿಯಾದ ದೇವದಾರಿನ ತೊಲೆ
ಗಳನ್ನು ಕಡಿದುಹಾಕುತ್ತಾರೆ. ಅವರು ಆ ತೊಲೆ
ಗಳನ್ನು ಬೆಂಕಿಯಲ್ಲಿ ಎಸೆಯುತ್ತಾರೆ.

[8]''ಅನೇಕ ಜನಾಂಗಗಳ ಜನರು ಈ ನಗರದಿಂದ ಹಾದು
ಹೋಗುವವರು. ಅವರು, 'ಜೆರುಸಲೇಮ್ ಒಂದು
ಮಹಾನಗರವಾಗಿತ್ತು. ಯೆಹೋವನು ಜೆರುಸಲೇಮಿಗೆ

ಇಂಥ ಭಯಂಕರ ಸ್ಥಿತಿಯನ್ನು ಏಕೆ ತಂದನು ಎಂದು
ಒಬ್ಬರನ್ನೊಬ್ಬರು ಕೇಳುವರು.' 9 ಆ ಪ್ರಶ್ನೆಗೆ ಈ ಉತ್ತರ:
ಯೆಹೂದದ ಜನರು ತಮ್ಮ ದೇವರಾದ ಯೆಹೋವನ
ಒಡಂಬಡಿಕೆಯ ಅನುಸರಣೆಯನ್ನು ಬಿಟ್ಟುಬಿಟ್ಟರು.
ಅವರು ಬೇರೆ ದೇವರುಗಳ ಸೇವೆಯನ್ನು ಮಾಡಿ
ಪೂಜಿಸಿದರು.'''

## ರಾಜನಾದ ಯೋಹಾಜನ ಬಗ್ಗೆ ನ್ಯಾಯನಿರ್ಣಯ

10 ಸತ್ತ ರಾಜನ ಬಗ್ಗೆ ಅಳಬೇಡಿ. ಅವನಿಗೋಸ್ಕರ ಅಳ
ಬೇಡಿ. ಆದರೆ ಇಲ್ಲಿಂದ ಹೋಗುತ್ತಿರುವ ರಾಜನ
ಬಗ್ಗೆ ಗಟ್ಟಿಯಾಗಿ ರೋದಿಸಿರಿ. ಅವನು ಮತ್ತೆ
ಇಲ್ಲಿಗೆ ಬರುವದಿಲ್ಲ. ಆದುದರಿಂದ ಅವನಿ
ಗೋಸ್ಕರ ರೋಧಿಸಿರಿ. ಯೋಹಾಜನು ತನ್ನ ಜನ್ಮ,
ಭೂಮಿಯನ್ನು ಮತ್ತೆಂದಿಗೂ ನೋಡುವುದಿಲ್ಲ.

11 ಯೋಷೀಯನ ಮಗನಾದ ಯೋಹಾಜನ
(ಶಲ್ಲೂಮನ) ಬಗ್ಗೆ ಯೆಹೋವನು ಹೀಗೆಂದನು:
(ಶಲ್ಲೂಮನು ತನ್ನ ತಂದೆಯಾದ ಯೋಷೀಯನ
ಮರಣಾನಂತರ ರಾಜನಾದನು.) ''ಯೋಹಾಜನು
ಜೆರುಸಲೇಮಿನಿಂದ ಹೊರಟು ಹೋದನು. ಅವನು
ಮತ್ತೆಂದಿಗೂ ಜೆರುಸಲೇಮಿಗೆ ಹಿಂದಿರುಗುವುದಿಲ್ಲ.
12 ಈಜಿಪ್ಟಿನವರು ಅವನನ್ನು ತೆಗೆದುಕೊಂಡು ಹೋದ
ಸ್ಥಳದಲ್ಲಿಯೇ ಸತ್ತುಹೋಗುವನು. ಅವನು ಮತ್ತೊಮ್ಮೆ
ಈ ಪ್ರದೇಶವನ್ನು ನೋಡಲಾರನು.''

## ರಾಜನಾದ ಯೆಹೋಯಾಕೀಮನ ಬಗ್ಗೆ ನ್ಯಾಯ ನಿರ್ಣಯ

13 ರಾಜನಾದ ಯೆಹೋಯಾಕೀಮನಿಗೆ ದುರ್ಗತಿ
ಉಂಟಾಗುವುದು. ಅವನು ತನ್ನ ಅರಮನೆಯನ್ನು
ಕಟ್ಟಿಸುವದಕೋಸ್ಕರ ದುರ್ನೀತಿಯನ್ನು ಅವಲಂ
ಭಿಸಿದ್ದಾನೆ. ಮಹಡಿಯ ಮೇಲೆ ಕೋಣೆಗಳನ್ನು
ಕಟ್ಟಿಸುವದಕ್ಕಾಗಿ ಅವನು ತನ್ನ ಜನರನ್ನು ವಂಚಿಸು
ತ್ತಿದ್ದಾನೆ. ಅವನು ತನ್ನ ಜನರಿಂದ ಬಿಟ್ಟೀ
ಕೆಲಸವನ್ನು ಮಾಡಿಸುತ್ತಿದ್ದಾನೆ. ಅವರಿಂದ ಕೆಲಸ
ಮಾಡಿಸಿ ಕೊಂಡು ಅವರಿಗೆ ಕೂಲಿಯನ್ನೇ
ಕೊಡುವದಿಲ್ಲ.
14 ಯೆಹೋಯಾಕೀಮನು ''ನಾನೇ ಒಂದು ದೊಡ್ಡ
ಅರಮನೆಯನ್ನು ಕಟ್ಟಿಸುತ್ತೇನೆ. ನಾನು ಮಹಡಿಯ
ಮೇಲೆ ದೊಡ್ಡ ದೊಡ್ಡ ಕೋಣೆಗಳನ್ನು ಕಟ್ಟಿಸು
ತ್ತೇನೆ'' ಎಂದು ಹೇಳುತ್ತಾನೆ. ಅವನು ದೊಡ್ಡ
ದೊಡ್ಡ ಕಿಟಕಿಗಳುಳ್ಳ ಮನೆಯನ್ನು ಕಟ್ಟಿಸುತ್ತಾನೆ.
ದೇವದಾರಿನ ಹಲಗೆಗಳನ್ನು ಹೊದಿಸುತ್ತಾನೆ.
ಅದಕ್ಕೆ ಕೆಂಪು ಬಣ್ಣವನ್ನು ಬಳಿಯುತ್ತಾನೆ.
15 ''ಯೆಹೋಯಾಕೀಮನೇ, ನಿನ್ನ ಮನೆಯಲ್ಲಿ ಹೆಚ್ಚು
ದೇವದಾರಿನ ಮರವನ್ನು ಬಹಳವಾಗಿ ಇಟ್ಟು
ಕೊಳ್ಳುವದರಿಂದ ನೀನು ದೊಡ್ಡ ರಾಜನಾಗುವ
ದಿಲ್ಲ. ನಿಮ್ಮ ತಂದೆಯಾದ ಯೋಷೀಯನು ಅನ್ನ
ಪಾನೀಯಗಳಿಂದ ತೃಪ್ತಿ ಪಟ್ಟುಕೊಳ್ಳುತ್ತಿದ್ದನು.
ಅವನು ನೀತಿ ಮತ್ತು ನ್ಯಾಯ ಸಮ್ಮತವಾದುದನ್ನು
ಮಾಡುತ್ತಿದ್ದನು. ಯೋಷೀಯನು ಹಾಗೆ ಮಾಡಿ
ದುದರಿಂದ ಎಲ್ಲವೂ ಸರಿಹೋಯಿತು.
16 ಯೋಷೀಯನು ದೀನ ದರಿದ್ರರಿಗೆ ಸಹಾಯ
ಮಾಡುತ್ತಿದ್ದನು. ಯೋಷೀಯನು ಹಾಗೆ ಮಾಡಿ
ದುದ್ದರಿಂದ ಎಲ್ಲವೂ ಸರಿಹೋಯಿತು. ಯೆಹೋ
ಯಾಕೀಮನೇ, ''ದೇವರನ್ನು ಅರಿತುಕೊಳ್ಳು
ವುದು ಎಂದರೇನು?'' ನ್ಯಾಯ ಮತ್ತು ನೀತಿ
ಯಿಂದ ನಡೆದುಕೊಳ್ಳುವುದು. ನನ್ನನ್ನು ಅರಿತು
ಕೊಳ್ಳಲುಬೇಕಾದದ್ದು ಅದೇ.'' ಇದು ಯೆಹೋವ
ನಿಂದ ಬಂದ ಸಂದೇಶ.
17 ಯೆಹೋಯಾಕೀಮನೇ, ನಿನಗೆ ಲಾಭದಾಯಕ
ವಾದುದು ಮಾತ್ರ ನಿನ್ನ ಕಣ್ಣಿಗೆ ಕಾಣುತ್ತದೆ. ನೀನು
ಯಾವಾಗಲೂ ನಿನಗೆ ಹೆಚ್ಚು ಲಾಭ ಬರುವದನ್ನು
ನೋಡುವೆ. ನೀನು ನಿರಾಪರಾಧಿಗಳನ್ನು
ಕೊಲ್ಲಲು ಸಿದ್ಧನಾಗಿರುವೆ.'' ನೀನು ಬೇರೆಯವರ
ವಸ್ತುಗಳನ್ನು ಅಪಹರಿಸಲು ಸಿದ್ಧನಾಗಿರುವೆ.
18 ಯೋಷೀಯನ ಮಗನಾದ ಯೆಹೋಯಾಕೀಮ
ನಿಗೆ ಯೆಹೋವನು ಹೀಗೆ ಹೇಳುವನು, ''ಯೆಹೂ
ದದ ಜನರು ಯೆಹೋಯಾಕೀಮನಿಗೋಸ್ಕರ
ಗೋಳಾಡುವದಿಲ್ಲ. ಅವರು ಒಬ್ಬರಿಗೊಬ್ಬರು,
'ನನ್ನ ಸೋದರನೇ, ಯೆಹೋಯಾಕೀಮನಿ
ಗೋಸ್ಕರ ನನಗೆ ತುಂಬ ದುಃಖವಾಗಿದೆ, ನನ್ನ
ಸೋದರಿಯೇ, ಯೆಹೋಯಾಕೀಮನಿಗೋಸ್ಕರ
ನನಗೆ ತುಂಬ ದುಃಖವಾಗಿದೆ' ಎಂದು ಹೇಳುವ
ದಿಲ್ಲ. ಯೆಹೂದದ ಜನರು ಯೆಹೋಯಾಕೀಮ
ನಿಗೋಸ್ಕರ ಅಳುವದಿಲ್ಲ. ಅವರು ಅವನ ಬಗ್ಗೆ
'ಒಡೆಯನೇ, ನನ್ನ ರಾಜನೇ, ನನಗೆ ತುಂಬಾ
ದುಃಖವಾಗಿದೆ, ಎಂದು ಹೇಳುವದಿಲ್ಲ.
19 ಜೆರುಸಲೇಮಿನ ಜನರು ಯೆಹೋಯಾಕೀಮ
ನನ್ನು ಒಂದು ಕತ್ತೆಯನ್ನು ಹೂಳಿದಂತೆ ಹೂಳಿ
ಬಿಡುತ್ತಾರೆ. ಅವರು ಅವನ ಶವವನ್ನು ದೂರ
ಎಳೆದುಕೊಂಡು ಹೋಗುತ್ತಾರೆ ಮತ್ತು ಅವನ ಶವ
ವನ್ನು ಜೆರುಸಲೇಮಿನ ದ್ವಾರಗಳ ಹೊರಗೆ ಎಸೆದು
ಬಿಡುತ್ತಾರೆ.

20 ‘‘ಯೆಹೂದವೇ, ಲೆಬನೋನ್ ಪರ್ವತವನ್ನು ಹತ್ತಿ ಕೂಗಿಕೋ, ನಿನ್ನ ಧ್ವನಿಯು ಬಾಷಾನ್ ಪರ್ವತಗಳಲ್ಲಿ ಕೇಳಿಸಲಿ. ಅಬಾರೀಮಿನಲ್ಲಿ ಅರಚಿಕೋ; ಏಕೆಂದರೆ ನಿನ್ನ ‘ಪ್ರಿಯತಮರೆಲ್ಲರನ್ನೂ’ ನಾಶ ಮಾಡಲಾಗುವುದು.

21 ‘‘ಯೆಹೂದವೇ, ನೀನು ಸುರಕ್ಷಿತಳಾಗಿರುವೆ ಎಂದು ನೀನು ಭಾವಿಸಿಕೊಂಡಿರುವೆ. ಆದರೆ ನಾನು ನಿನಗೆ ಎಚ್ಚರಿಕೆಯನ್ನು ಕೊಟ್ಟೆ, ಹೌದು, ನಾನೇ ಎಚ್ಚರಿಕೆಯನ್ನು ಕೊಟ್ಟೆ ಆದರೆ ನೀನು ಅದನ್ನು ಕಿವಿಗೆ ಹಾಕಿಕೊಳ್ಳಲು ಒಪ್ಪಲಿಲ್ಲ. ನಿನ್ನ ಬಾಲ್ಯದಿಂದಲೂ ನೀನು ಹೀಗೆಯೇ ಮಾಡಿದೆ. ಯೆಹೂದವೇ, ನಿನ್ನ ಬಾಲ್ಯದಿಂದಲೂ ನೀನು ನನ್ನ ಆಜ್ಞೆಯನ್ನು ಪಾಲಿಸಲಿಲ್ಲ.

22 ಯೆಹೂದವೇ, ನನ್ನ ದಂಡನೆಯು ಒಂದು ಬಿರುಗಾಳಿಯಂತೆ ಬರುವುದು. ಅದು ನಿನ್ನ ಎಲ್ಲಾ ಕುರುಬರನ್ನು (ನಾಯಕರನ್ನು) ಹಾರಿಸಿಕೊಂಡು ಹೋಗುವುದು. ಯಾವುದಾದರೂ ಬೇರೆ ಜನಾಂಗ ನಿನಗೆ ಸಹಾಯಮಾಡಬಹುದೆಂದು ನೀನು ಭಾವಿಸಿಕೊಂಡಿರುವೆ. ಆದರೆ ಆ ಜನಾಂಗಗಳನ್ನೂ ಸೋಲಿಸಲಾಗುವುದು. ಆಗ ನಿನಗೆ ನಿಜವಾಗಿಯೂ ಆಶಾಭಂಗವಾಗುವುದು. ನೀನು ಮಾಡಿದ ಎಲ್ಲಾ ದುಷ್ಕೃತ್ಯಗಳಿಗಾಗಿ ನೀನು ಪೇಚಾಡುವೆ.

23 ‘‘ರಾಜನೇ, ಬೆಟ್ಟದ ಮೇಲೆ ದೇವದಾರು ಮರದಿಂದ ಮಾಡಿದ ನಿನ್ನ ಮನೆಯಲ್ಲಿ ನೀನು ವಾಸಿಸುವೆ. ಆ ಮನೆಯು ಲೆಬನೋನಿನ ಮರದ ತೋಪಿನಂತಿದೆ. ನೀನು ಎತ್ತರವಾದ ಪರ್ವತ ಪ್ರದೇಶದಲ್ಲಿದ್ದ ನಿನ್ನ ವಿಶಾಲವಾದ ಮನೆಯಲ್ಲಿ ಸುರಕ್ಷಿತವಾಗಿರುವುದಾಗಿ ತಿಳಿದುಕೊಂಡಿರುವೆ. ಆದರೆ ನಿನಗೆ ದಂಡನೆಯಾದಾಗ ನೀನು ನರಳುವೆ. ಪ್ರಸವವೇದನೆಯಂಥ ನೋವನ್ನು ನೀನು ಅನುಭವಿಸುವೆ.’’

### ರಾಜನಾದ ಯೆಹೋಯಾಚೀನನ ಬಗ್ಗೆ ನ್ಯಾಯನಿರ್ಣಯ

24 ಯೆಹೋವನು ಹೀಗನ್ನುತ್ತಾನೆ: ‘‘ಯೆಹೋಯಾಕೀ
ಮನ ಮಗನೂ ಯೆಹೂದದ ರಾಜನೂ ಆಗಿರುವ
ಯೆಹೋಯಾಚೀನನೇ, ನನ್ನ ಜೀವದಾಣೆಯಾಗಿಯೂ
ನಿನಗೆ ಹೀಗೆ ಮಾಡುವೆನು. ನೀನು ನನ್ನ ಬಲಗೈಯ
ಮುದ್ರೆಯುಂಗುರವಾಗಿದ್ದರೂ ನಾನು ನಿನ್ನನ್ನು ಅಲ್ಲಿಂದ
ಕಿತ್ತುಹಾಕುವೆನು. 25 ಯೆಹೋಯಾಚೀನನೇ, ನಾನು
ನಿನಗೆ ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನ
ಮತ್ತು ಕಸ್ದೀಯರ ಕೈಗೆ ಕೊಟ್ಟುಬಿಡುವೆನು. ನೀನು ಹೆದರಿ
ಕೊಂಡಿರುವುದು ಆ ಜನರಿಗೇ. ಆ ಜನರು ನಿನ್ನನ್ನು ಕೊಲ್ಲ
ಬಯಸುತ್ತಾರೆ. 26 ನಾನು ನಿನ್ನನ್ನೂ ನಿನ್ನ ತಾಯಿಯನ್ನೂ
ನಿಮ್ಮಿಬ್ಬರ ಜನ್ಮಸ್ಥಳವಲ್ಲದ ಬೇರೆ ದೇಶದಲ್ಲಿ ಎಸೆದು
ಬಿಡುತ್ತೇನೆ. ನೀನು ಮತ್ತು ನಿನ್ನ ತಾಯಿ ಆ ದೇಶದಲ್ಲಿ
ಸತ್ತುಹೋಗುವಿರಿ. 27 ಯೆಹೋಯಾಚೀನನೇ, ನೀನು
ನಿಮ್ಮ ದೇಶಕ್ಕೆ ಹಿಂದಿರುಗಬೇಕೆಂದು ಅಪೇಕ್ಷಿಸಿದರೂ
ನಿಮಗೆ ಬರಲು ಸಾಧ್ಯವಾಗದು.’’

28 ಕೊನ್ಯನು (ಯೆಹೋಯಾಚೀನನು) ಜನರು ಎಸೆದುಬಿಟ್ಟ ಒಡೆದ ಮಡಕೆಯಂತಿದ್ದಾನೆ. ಅವನು ಯಾರಿಗೂ ಬೇಕಾಗದ ಮಡಕೆಯಂತಿದ್ದಾನೆ, ಯೆಹೋಯಾಚೀನ ಮತ್ತು ಅವನ ಮಕ್ಕಳನ್ನು ಏಕೆ ಹೊರಗೆ ಎಸೆಯಲಾಗುವುದು? ಅವರನ್ನು ಪರದೇಶದಲ್ಲಿ ಏಕೆ ಎಸೆಯಲಾಗುವುದು?

29 ದೇಶವೇ, ದೇಶವೇ, ಯೆಹೂದದ ದೇಶವೇ, ಯೆಹೋವನ ಸಂದೇಶವನ್ನು ಕೇಳು.

30 ಯೆಹೋವನು ಹೇಳುವುದೇನಂದರೆ: ‘‘ಯೆಹೋಯಾಚೀನನು ಮಕ್ಕಳಿಲ್ಲದವನೆಂದು ನೊಂದಾಯಿಸಿರಿ. ಯೆಹೋಯಾಚೀನನು ತನ್ನ ಜೀವನದಲ್ಲಿ ಯಶಸ್ವಿಯಾಗುವುದಿಲ್ಲ. ಅವನ ಮಕ್ಕಳಲ್ಲಿ ಯಾರೂ ದಾವೀದನ ಸಿಂಹಾಸನವನ್ನೇರುವದಿಲ್ಲ. ಅವನ ಮಕ್ಕಳಲ್ಲಿ ಯಾರೂ ಯೆಹೂದದಲ್ಲಿ ರಾಜ್ಯಭಾರ ಮಾಡುವದಿಲ್ಲ.’’

23 ಯೆಹೋವನ ಸಂದೇಶವಿದು: ‘‘ಯೆಹೂದದ
ಕುರುಬರಿಗೆ ಒಳ್ಳೆಯದಾಗುವದಿಲ್ಲ. ಈ ಕುರು
ಬರು ಕುರಿಗಳನ್ನು ಹಾಳುಮಾಡುತ್ತಿದ್ದಾರೆ. ಅವರು ನನ್ನ
ಹುಲ್ಲುಗಾವಲಿನಿಂದ ಕುರಿಗಳು ಎಲ್ಲಾ ದಿಕ್ಕುಗಳಿಗೂ
ಓಡಿಹೋಗುವಂತೆ ಮಾಡುತ್ತಿದ್ದಾರೆ.’’
2 ಆ ಕುರುಬರು ನನ್ನ ಜನರಿಗೆ ಹೊಣೆಗಾರರಾಗಿದ್ದಾರೆ.
ಇಸ್ರೇಲಿನ ದೇವರಾದ ಯೆಹೋವನು ಆ ಕುರುಬರಿಗೆ
ಹೀಗೆ ಹೇಳುತ್ತಾನೆ, ‘‘ನನ್ನ ಕುರಿಗಳು ಎಲ್ಲಾ ದಿಕ್ಕುಗಳಿಗೂ
ಚದರುವಂತೆ ನೀವು ಮಾಡಿರುವಿರಿ. ನೀವು ಅವುಗಳನ್ನು
ಓಡಿಸಿಬಿಟ್ಟಿದ್ದೀರಿ. ನೀವು ಅವುಗಳ ಯೋಗಕ್ಷೇಮವನ್ನು
ನೋಡಿಕೊಳ್ಳಲಿಲ್ಲ. ಈಗ ನಾನು ನಿಮ್ಮನ್ನು ವಿಚಾರಿಸಿ
ಕೊಳ್ಳುತ್ತೇನೆ. ನೀವು ಮಾಡಿದ ದುಷ್ಕೃತ್ಯಗಳಿಗಾಗಿ
ನಿಮ್ಮನ್ನು ದಂಡಿಸುತ್ತೇನೆ.’’ ಯೆಹೋವನು ಹೀಗೆ ಹೇಳಿ
ದನು. 3 ‘‘ನಾನು ನನ್ನ ಕುರಿಗಳನ್ನು ಬೇರೆ ದೇಶಗಳಿಗೆ
ಕಳುಹಿಸಿದೆ. ಆದರೆ ಉಳಿದ ನನ್ನ ಕುರಿಗಳನ್ನು ಒಂದೆಡೆ
ಸೇರಿಸುವೆನು. ಅವುಗಳನ್ನು ಅವುಗಳ ಹುಲ್ಲುಗಾವಲಿಗೆ
ತರುವೆನು. ಅವುಗಳಿಗೆ ಅನೇಕ ಮಕ್ಕಳಾಗಿ ಅವುಗಳ ಸಂಖ್ಯೆ
ಬೆಳೆಯುವುದು.

4ನನ್ನ ಕುರಿಗಳನ್ನು ನೋಡಿಕೊಳ್ಳುವ ದಕ್ಕೆ ನಾನು ಹೊಸ ಕುರುಬರನ್ನು ನೇಮಿಸುವೆನು. ಆ ಕುರುಬರು ನನ್ನ ಕುರಿಗಳ ಯೋಗಕ್ಷೇಮವನ್ನು ನೋಡಿ ಕೊಳ್ಳುವರು. ನನ್ನ ಕುರಿಗಳು ಬೆದರುವದಿಲ್ಲ, ಭಯಪಡುವದಿಲ್ಲ. ನನ್ನ ಒಂದು ಕುರಿಯೂ ಕಳೆದು ಹೋಗುವದಿಲ್ಲ.'' ಇದು ಯೆಹೋವನ ಸಂದೇಶ.

### ಸದ್ಧರ್ಮದ ಸಸಿ

5 ಇದು ಯೆಹೋವನ ಸಂದೇಶ. ''ನಾನು ಒಳ್ಳೆಯ 'ಸಸಿಯನ್ನು' ಚಿಗುರಿಸುವ ಕಾಲ ಬಂದಿದೆ. ಅವನು ಬುದ್ಧಿವಂತಿಕೆಯಿಂದ ಆಳುವ ರಾಜನಾಗಿರುವನು. ಅವನು ದೇಶದಲ್ಲಿ ನೀತಿ ಮತ್ತು ನ್ಯಾಯಬದ್ಧ ವಾದುದ್ದನ್ನು ಮಾಡುವನು.

6 ಸದ್ಧರ್ಮದ 'ಸಸಿಯ' ಸಮಯದಲ್ಲಿ ಯೆಹೂದದ ಜನರು ರಕ್ಷಿಸಲ್ಪಡುವರು ಮತ್ತು ಇಸ್ರೇಲ್ ಸುರಕ್ಷಿತವಾಗಿರುವುದು. ಯೆಹೋವನೇ ನಮ್ಮ ಸದ್ಧರ್ಮ ಎಂಬ ಹೆಸರು ಅವನಿಗಾಗುವುದು.

7ಇದು ಯೆಹೋವನಿಂದ ಬಂದ ಸಂದೇಶ. ''ಜನರು
ಇನ್ನು ಮೇಲೆ ದೇವರ ಆಣೆಯನ್ನು ಹಳೆಯ ರೀತಿಯಲ್ಲಿ
ಹೇಳಲಾರದ ಕಾಲ ಬರುತ್ತಿದೆ. 'ಇಸ್ರೇಲರನ್ನು ಈಜಿಪ್ಟಿ
ನಿಂದ ಹೊರತಂದ ಯೆಹೋವನ ಆಣೆ' ಎಂಬುದು
ದೇವರ ಆಣೆಯ ಹಳೆಯ ರೀತಿಯಾಗಿತ್ತು. 8ಆದರೆ ಹೊಸ
ಕಾಲ ಬರಲಿದೆ. ಆಗ, ''ಇಸ್ರೇಲರನ್ನು ಉತ್ತರದ ನಾಡಿ
ನಿಂದಲೂ ಅವರನ್ನು ಚದರಿಸಿಬಿಟ್ಟಿದ್ದ ಎಲ್ಲ ದೇಶಗ
ಳಿಂದಲೂ ಹೊರತಂದ ಯೆಹೋವನಾಣೆ ಎಂದು
ಹೇಳುವರು.' ಆಗ ಇಸ್ರೇಲರು ಸ್ವದೇಶದಲ್ಲಿ
ನೆಲಸುವರು.''

### ಸುಳ್ಳು ಪ್ರವಾದಿಗಳ ಬಗ್ಗೆ ನ್ಯಾಯ ನಿರ್ಣಯ

9 ಪ್ರವಾದಿಗಳಿಗೊಂದು ಸಂದೇಶ. ನಾನು ಬಹಳ ದುಃಖಿತನಾಗಿದ್ದೇನೆ. ನನ್ನ ಹೃದಯ ಒಡೆದು ಹೋಗಿದೆ. ನನ್ನ ಎಲುಬುಗಳೆಲ್ಲಾ ನಡುಗುತ್ತಿವೆ. ನಾನು ಅಮಲೇರಿದವನಂತಿದ್ದೇನೆ. ಯೆಹೋವನೂ ಆತನ ಪರಿಶುದ್ಧ ನುಡಿಗಳೂ ಇದಕ್ಕೆ ಕಾರಣ.

10 ಯೆಹೂದ ದೇಶವು ವ್ಯಭಿಚಾರಿಗಳಿಂದ ತುಂಬಿ ಹೋಗಿದೆ. ಅವರು ಅನೇಕ ರೀತಿಯಲ್ಲಿ ಅಪನಂಬಿಗಸ್ತರಾಗಿದ್ದಾರೆ. ಯೆಹೋವನು ನಾಡನ್ನು ಶಪಿಸಿದ್ದರಿಂದ ಅದು ಬರಡುಭೂಮಿಯಾಯಿತು. ಹುಲ್ಲುಗಾವಲಿನ ಸಸಿಗಳು ಒಣಗಿ ಸತ್ತು ಹೋಗತ್ತಲಿವೆ. ಹೊಲಗಳು ಮರುಭೂಮಿಯಂತಾಗಿವೆ. ಪ್ರವಾದಿಗಳು ಸೆರೆಬಿಯ್ಯಲ್ಪಟ್ಟಿದ್ದಾರೆ. ಆ ಪ್ರವಾದಿಗಳು ತಮ್ಮ ಪ್ರಭಾವವನ್ನೂ ಶಕ್ತಿಯನ್ನೂ ತಪ್ಪಾಗಿ ಬಳಸಿಕೊಳ್ಳುತ್ತಿದ್ದಾರೆ.

11 ''ಪ್ರವಾದಿಗಳೂ ಯಾಜಕರೂ ದುಷ್ಟರಾಗಿದ್ದಾರೆ. ಅವರು ನನ್ನ ಪವಿತ್ರಾಲಯದಲ್ಲಿಯೇ ದುಷ್ಕಾರ್ಯಗಳನ್ನು ಮಾಡುವುದನ್ನು ನಾನು ನೋಡಿದ್ದೇನೆ.'' ಇದು ಯೆಹೋವನಿಂದ ಬಂದ ಸಂದೇಶ.

12 ''ಆದುದರಿಂದ ನಾನು ಅವರಿಗೆ ನನ್ನ ಸಂದೇಶಗಳನ್ನು ಇನ್ನು ಮೇಲೆ ಕೊಡುವುದಿಲ್ಲ. ಆಗ ಅವರು ಕತ್ತಲಲ್ಲಿ ನಡೆಯಬೇಕಾಗುವುದು. ಆ ಪ್ರವಾದಿಗಳ ಮತ್ತು ಯಾಜಕರ ಮಾರ್ಗಗಳು ಜಾರುವ ದಾರಿಗಳಾಗಿವೆ. ಕತ್ತಲಲ್ಲಿ ಆ ಪ್ರವಾದಿಗಳು ಮತ್ತು ಯಾಜಕರು ಬೀಳುವರು. ನಾನು ಅವರಿಗೆ ಕೇಡನ್ನು ಬರಮಾಡಿ ಅವರನ್ನು ದಂಡಿಸುವೆನು'' ಇದು ಯೆಹೋವನಿಂದ ಬಂದ ಸಂದೇಶ.

13 ''ಸಮಾರ್ಯದ ಪ್ರವಾದಿಗಳು ಕೆಟ್ಟದ್ದಾಗಿ ನಡೆದುಕೊಂಡದ್ದನ್ನು ನಾನು ನೋಡಿದ್ದೇನೆ. ಅವರು ಬಾಳ್ ದೇವತೆಗೋಸ್ಕರ ಆವೇಶದಿಂದ ಪ್ರವಾದಿಸಿದ್ದನ್ನು ನಾನು ಕಂಡಿದ್ದೇನೆ. ಆ ಪ್ರವಾದಿಗಳು ಇಸ್ರೇಲಿನ ಜನರನ್ನು ಯೆಹೋವನಿಂದ ದೂರ ತೆಗೆದುಕೊಂಡು ಹೋಗಿದ್ದಾರೆ.

14 ಯೆಹೂದದ ಪ್ರವಾದಿಗಳು ಜೆರುಸಲೇಮಿನಲ್ಲಿ ಭಯಂಕರ ದುಷ್ಟಕಾರ್ಯಗಳನ್ನು ಮಾಡುವುದನ್ನು ನಾನು ನೋಡಿದ್ದೇನೆ. ಈ ಪ್ರವಾದಿಗಳು ವ್ಯಭಿಚಾರ ಮಾಡುತ್ತಾರೆ. ಅವರು ಸುಳ್ಳುಗಳನ್ನು ಕೇಳಿ, ಆ ಸುಳ್ಳುಬೋಧನೆಗಳನ್ನು ಪಾಲಿಸುತ್ತಾರೆ. ಅವರು ದುಷ್ಟರಿಗೆ ಅವರ ದುಷ್ಟತನವನ್ನು ಮುಂದುವರಿಸಲು ಪ್ರೋತ್ಸಾಹಿಸುತ್ತಾರೆ. ಆದುದರಿಂದ ಜನರು ಪಾಪ ಮಾಡುವದನ್ನು ನಿಲ್ಲಿಸಲಿಲ್ಲ. ಅವರೆಲ್ಲರು ನನಗೆ ಸೊದೋಮ್ ನಗರದಂತೆ ಇದ್ದಾರೆ. ಜೆರುಸಲೇಮಿನ ಜನರು ಗೋಮೋರ* ನಗರದಂತೆ ಇದ್ದಾರೆ.''

15 ಸರ್ವಶಕ್ತನಾದ ಯೆಹೋವನು ಪ್ರವಾದಿಗಳ ಬಗ್ಗೆ ಹೀಗನ್ನುತ್ತಾನೆ, ''ನಾನು ಆ ಪ್ರವಾದಿಗಳನ್ನು ದಂಡಿಸುವೆನು. ಆ ಶಿಕ್ಷೆಯು ವಿಷಪೂರಿತ ಆಹಾರ ದಂತೆಯೂ ನೀರಿನಂತೆಯೂ ಇರುವುದು. ಪ್ರವಾದಿಗಳು ಒಂದು ಆಧ್ಯಾತ್ಮಿಕ ವ್ಯಾಧಿಯನ್ನು ಪ್ರಾರಂಭಿಸಿದರು. ಆ ವ್ಯಾಧಿಯು ಇಡೀ

---

**ಸೊದೋಮ್ ಮತ್ತು ಗೋಮೋರ** ಇವುಗಳು ಎರಡು ನಗರಗಳು, ಇಲ್ಲಿಯ ಜನರು ಬಹಳ ದುಷ್ಟರಾಗಿದ್ದ ಕಾರಣ ದೇವರು ಈ ನಗರಗಳನ್ನು ನಾಶಪಡಿಸಿದನು.

ದೇಶದಲ್ಲೆಲ್ಲಾ ಪ್ರಸರಿಸಿತು. ಆದುದರಿಂದ ನಾನು ಆ ಪ್ರವಾದಿಗಳನ್ನು ಶಿಕ್ಷಿಸುತ್ತೇನೆ. ಆ ವ್ಯಾಧಿಯು ಆ ಪ್ರವಾದಿಗಳಿಂದ ಜೆರುಸಲೇಮಿಗೆ ಬಂದಿತು.''

16 ಸರ್ವಶಕ್ತನಾದ ಯೆಹೋವನು ಹೀಗನ್ನುತ್ತಾನೆ: ''ಆ ಪ್ರವಾದಿಗಳು ನಿಮಗೆ ಹೇಳುತ್ತಿರುವ ವಿಷಯಗಳ ಕಡೆಗೆ ಗಮನ ಕೊಡಬೇಡಿರಿ. ಅವರು ನಿಮ್ಮನ್ನು ಮರುಳುಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ಅವರು ದರ್ಶನಗಳ ಬಗ್ಗೆ ಹೇಳುತ್ತಾರೆ. ಅವರ ದರ್ಶನಗಳು ಅವರ ಮನಸ್ಸಿನಿಂದ ಬಂದವುಗಳೇ ಹೊರತು ನನ್ನಿಂದ ಬಂದವುಗಳಲ್ಲ.

17 ಕೆಲವು ಜನರು ಯೆಹೋವನ ನಿಜವಾದ ಸಂದೇಶಗಳನ್ನು ದ್ವೇಷಿಸುತ್ತಾರೆ. ಆದುದರಿಂದ ಆ ಪ್ರವಾದಿಗಳು ಆ ಜನರಿಗೆ ಬೇರೆಯದನ್ನೇ ಹೇಳುತ್ತಾರೆ. ಅವರು 'ನಿಮಗೆ ಶುಭವಾಗುವುದು' ಎನ್ನುತ್ತಾರೆ. ಕೆಲವು ಜನರು ಬಹಳ ಮೊಂಡರಾಗಿದ್ದಾರೆ. ಅವರು ತಮ್ಮ ಮನಸ್ಸಿಗೆ ಬಂದುದನ್ನೇ ಮಾಡುತ್ತಾರೆ. ಅವರಿಗೆ ಈ ಪ್ರವಾದಿಗಳು 'ನಿಮಗೆ ಯಾವ ಕೇಡೂ ಸಂಭವಿಸುವದಿಲ್ಲ' ಎಂದು ಹೇಳುತ್ತಾರೆ.

18 ಈ ಪ್ರವಾದಿಗಳಲ್ಲಿ ಯಾರೊಬ್ಬರೂ ಪರಲೋಕದ ಸಭೆಯಲ್ಲಿ ನಿಂತಿಲ್ಲ. ಯಾರೊಬ್ಬರೂ ಯೆಹೋವನ ಸಂದೇಶವನ್ನು ಕೇಳಿಲ್ಲ ಅಥವಾ ನೋಡಿಲ್ಲ. ಯಾರೊಬ್ಬರೂ ಯೆಹೋವನ ಸಂದೇಶವನ್ನು ಸೂಕ್ಷ್ಮವಾಗಿ ಪರಿಶೀಲಿಸಿಲ್ಲ.

19 ಈಗ ಯೆಹೋವನಿಂದ ದಂಡನೆಯು ಬಿರುಗಾಳಿಯಂತೆ ಬರುವುದು. ಯೆಹೋವನ ಕೋಪವು ತೂಫಾನಿನಂತೆ ದುಷ್ಟರ ತಲೆಯ ಮೇಲೆ ಆರ್ಭಟಿಸಿ ಬೀಳುವುದು.

20 ''ಆತನು ಮಾಡಬೇಕೆಂದು ಯೋಜಿಸಿದ್ದನ್ನು ಮಾಡಿ ಮುಗಿಸುವವರೆಗೆ ಆತನ ಕೋಪವು ಕಡಿಮೆಯಾಗುವುದಿಲ್ಲ. ಆ ದಿನವಾದ ಮೇಲೆ ನೀವು ಇದನ್ನು ಸರಿಯಾಗಿ ಅರ್ಥಮಾಡಿಕೊಳ್ಳುವಿರಿ.

21 ನಾನು ಆ ಪ್ರವಾದಿಗಳನ್ನು ಕಳುಹಿಸಲಿಲ್ಲ. ಆದರೂ ಅವರು ತಮ್ಮ ಸಂದೇಶವನ್ನು ಕೊಡಲು ಆತುರಪಟ್ಟರು. ನಾನು ಅವರೊಂದಿಗೆ ಮಾತನಾಡಲಿಲ್ಲ ಆದರೂ ಅವರು ನನ್ನ ಹೆಸರು ಹೇಳಿ ಉಪದೇಶ ಮಾಡಿದರು.

22 ಅವರು ನನ್ನ ಪರಲೋಕದ ಸಭೆಯಲ್ಲಿ ಭಾಗವಹಿಸಿದ್ದ ಪಕ್ಷದಲ್ಲಿ ಅವರು ನನ್ನ ಸಂದೇಶಗಳನ್ನು ಯೆಹೂದದ ಜನರಿಗೆ ಹೇಳಬಹುದಾಗಿತ್ತು. ಅವರ ಕೆಟ್ಟತನವನ್ನೂ ದುಷ್ಟತನವನ್ನೂ ತಡೆಯಬಹುದಾಗಿತ್ತು.''

23 ಈ ಸಂದೇಶ ಯೆಹೋವನಿಂದ ಬಂದಿತು. ''ನಾನೇ ಯೆಹೋವನು. ನಾನು ಯಾವಾಗಲೂ ಸಮೀಪವಾಗಿದ್ದೇನೆ. ನಾನು ಬಹಳ ದೂರವಿಲ್ಲ.

24 ಒಬ್ಬನು ನನಗೆ ಕಾಣದಂತೆ ಗುಪ್ತವಾದ ಸ್ಥಳದಲ್ಲಿ ಅಡಗಿಕೊಳ್ಳಲು ಪ್ರಯತ್ನಿಸಿದರೂ ನಾನು ಅವನನ್ನು ಸರಾಗವಾಗಿ ನೋಡಬಲ್ಲೆನು. ನಾನು ಭೂಮ್ಯಾಕಾಶಗಳ ಎಲ್ಲಾ ಕಡೆಗಳಲ್ಲೂ ಇದ್ದೇನೆ.'' ಯೆಹೋವನೇ ಇವುಗಳನ್ನು ಹೇಳಿದ್ದಾನೆ.

25''ನನ್ನ ಹೆಸರಿನಿಂದ ಸುಳ್ಳುಬೋಧನೆ ಮಾಡುವ
ಪ್ರವಾದಿಗಳಿದ್ದಾರೆ. ಅವರು 'ನಾನೊಂದು ಕನಸು ಕಂಡೆ,
ನಾನೊಂದು ಕನಸು ಕಂಡೆ' ಎಂದು ಹೇಳುತ್ತಾರೆ. 26ಎಷ್ಟು
ದಿನ ಹೀಗೆ ನಡೆಯುವುದು? ಆ ಪ್ರವಾದಿಗಳು ಸುಳ್ಳು
ಗಳನ್ನೇ ಯೋಚಿಸುತ್ತಾರೆ. ಆಮೇಲೆ ಆ ಸುಳ್ಳುಗಳನ್ನೇ
ಜನರಿಗೆ ಬೋಧಿಸುತ್ತಾರೆ. 27.ಯೆಹೂದದ ಜನರು ನನ್ನ
ಹೆಸರನ್ನು ಮರೆಯುವಂತೆ ಅವರು ಪ್ರಯತ್ನ ಮಾಡುತ್ತಿ
ದ್ದಾರೆ. ಅವರು ಒಬ್ಬರಿಗೊಬ್ಬರು ಈ ಸುಳ್ಳು ಕನಸುಗಳ
ಬಗ್ಗೆ ಹೇಳಿ ಹೀಗೆ ಮಾಡುತ್ತಿದ್ದಾರೆ. ಅವರ ಪೂರ್ವಿಕರು
ನನ್ನನ್ನು ಮರೆತಂತೆಯೇ ನನ್ನ ಜನರು ಸಹ ನನ್ನನ್ನು
ಮರೆಯಲೆಂದು ಪ್ರಯತ್ನ ಮಾಡುತ್ತಿದ್ದಾರೆ. ಅವರ
ಪೂರ್ವಿಕರು ನನ್ನನ್ನು ಮರೆತು ಸುಳ್ಳುದೇವರಾದ ಬಾಳ
ನನ್ನು ಪೂಜಿಸಿದರು. 28ಹೊಟ್ಟು, ಗೋಧಿಯ ಕಾಳಲ್ಲ.
ಅದೇ ರೀತಿ, ಆ ಪ್ರವಾದಿಗಳ ಕನಸುಗಳು ನನ್ನ ಸಂದೇಶ
ಗಳಲ್ಲ, ಒಬ್ಬ ವ್ಯಕ್ತಿಗೆ ತನ್ನ ಕನಸಿನ ಬಗ್ಗೆ ಹೇಳ
ಬೇಕೆನಿಸಿದರೆ, ಅವನು ಹೇಳಲಿ. ಆದರೆ ನನ್ನ ಸಂದೇಶ
ವನ್ನು ಕೇಳಿದ ಮನುಷ್ಯನು ಆ ಸಂದೇಶವನ್ನು ಯಥಾರ್ಥ
ವಾಗಿ ಹೇಳಲಿ.

29ನನ್ನ ಸಂದೇಶವು ಬೆಂಕಿಯ ಜ್ವಾಲೆಯಂತಿದೆ. ಅದು
ಕಲ್ಲುಬಂಡೆಯನ್ನು ಒಡೆದುಹಾಕುವ ಸುತ್ತಿಗೆಯಂತಿದೆ''
ಇದು ಯೆಹೋವನ ನುಡಿ.

30''ನಾನು ಸುಳ್ಳುಪ್ರವಾದಿಗಳ ವಿರೋಧಿಯಾಗಿ
ದ್ದೇನೆ.'' ಇದು ಯೆಹೋವನ ನುಡಿ. ಈ ಪ್ರವಾದಿಗಳು
ನನ್ನ ಪದಗಳನ್ನು ಒಬ್ಬರಿಂದೊಬ್ಬರು ಕದಿಯುತ್ತಿದ್ದಾರೆ.*
31ನಾನು ಸುಳ್ಳುಪ್ರವಾದಿಗಳನ್ನು ವಿರೋಧಿಸುತ್ತೇನೆ.''
ಇದು ಯೆಹೋವನ ನುಡಿ. ''ಅವರು ತಮ್ಮ ಮಾತು
ಗಳನ್ನು ಹೇಳಿ ಅದು ನನ್ನ ಸಂದೇಶವೆಂಬುವಂತೆ ನಟನೆ
ಮಾಡುತ್ತಾರೆ. 32ನಾನು ಕಾಲ್ಪನಿಕ ಕನಸುಗಳನ್ನು ಬೋಧಿ
ಸುವ ಸುಳ್ಳುಪ್ರವಾದಿಗಳ ವಿರೋಧಿಯಾಗಿದ್ದೇನೆ.'' ಇದು

---

**ಈ … ಕದಿಯುತ್ತಿದ್ದಾರೆ** ನಿಜವಾದ ಪ್ರವಾದಿಗಳ ನುಡಿಗಳನ್ನು ಅನುಕರಿಸಿ, ಯಾರು ನಿಜವಾದ ಪ್ರವಾದಿಗಳು ಮತ್ತು ಯಾರು ಸುಳ್ಳು ಪ್ರವಾದಿಗಳು ಎಂದು ಶಂಕಿಸಲಾಗದಂತೆ ಮಾಡುತ್ತಿದ್ದ ಸುಳ್ಳು ಪ್ರವಾದಿಗಳ ಬಗ್ಗೆ ಯೆರೆಮೀಯನು ಇಲ್ಲಿ ಹೀಗೆ ಹೇಳಿದ್ದಿರಬಹುದು.

ಪ್ರಭುವಿನ ನುಡಿ. ‘‘ಅವರು ತಮ್ಮ ಸುಳ್ಳು ಬೋಧನೆಗ
ಳಿಂದ ನನ್ನ ಜನರನ್ನು ಅಡ್ಡದಾರಿಗೆಳೆಯುತ್ತಾರೆ. ನಾನು
ಜನರಿಗೆ ಉಪದೇಶ ಮಾಡುವದಕ್ಕಾಗಿ ಆ ಪ್ರವಾದಿಗಳನ್ನು
ಕಳುಹಿಸಿಲ್ಲ. ನನಗೋಸ್ಕರವಾಗಿ ಏನನ್ನಾದರೂ
ಮಾಡಲು ನಾನು ಅವರಿಗೆ ಎಂದೂ ಆಜ್ಞಾಪಿಸಿಲ್ಲ. ಅವರು
ಯೆಹೂದದ ಜನರಿಗೆ ಸ್ವಲ್ಪವೂ ಸಹಾಯವನ್ನು ಮಾಡ
ಲಾರರು’’ ಇದು ಯೆಹೋವನ ನುಡಿ.

### ಯೆಹೋವನಿಂದ ದುಃಖಕರ ಸಂದೇಶ

33‘‘ಯೆಹೂದದ ಜನರಾಗಲೀ, ಪ್ರವಾದಿಯಾಗಲೀ,
ಯಾಜಕನಾಗಲೀ, ಯೆರೆಮೀಯನೇ, ಯೆಹೋವನು
ದಯಪಾಲಿಸಿರುವ ಪ್ರಕಟನೆಯೇನು?’ ಎಂದು ನಿನ್ನನ್ನು
ಕೇಳಬಹುದು. ನೀನು ಅವರಿಗೆ, ‘ಯೆಹೋವನಿಗೆ ನೀವೇ
ದೊಡ್ಡ ಭಾರ.* ನಾನು ಆ ಭಾರವನ್ನು ಕೆಳಗೆ ಎಸೆದು
ಬಿಡುತ್ತೇನೆ’’’ ಎಂದು ಉತ್ತರಿಸು. ಇದು ಯೆಹೋವನ
ನುಡಿ.

34‘‘ಒಬ್ಬ ಪ್ರವಾದಿಯಾಗಲೀ, ಯಾಜಕನಾಗಲೀ,
ಸಾಮಾನ್ಯ ಮನುಷ್ಯನಾಗಲೀ ‘ಇದು ಯೆಹೋವನ ಭಾರ’
ಎಂದು ಹೇಳಿದರೆ ಅವನು ಸುಳ್ಳು ಹೇಳಿದಂತೆಯೇ.
ಆದುದರಿಂದ ನಾನು ಆ ವ್ಯಕ್ತಿಯನ್ನು ಮತ್ತು ಅವರ ಇಡೀ
ಕುಟುಂಬವನ್ನು ದಂಡಿಸುತ್ತೇನೆ. 35ನೀವು ಪರಸ್ಪರ
‘ಯೆಹೋವನ ಉತ್ತರವೇನು?’ ಅಥವಾ ‘ಯೆಹೋವನು
ಏನು ಹೇಳಿದನು?’ ಎಂದು ಮಾತನಾಡಬೇಕು. 36ನೀವು
ಪುನಃ ಎಂದಿಗೂ ‘ಯೆಹೋವನ ಭಾರ’ ಎಂಬ ಮಾತನ್ನು
ಉಪಯೋಗಿಸಕೂಡದು. ಏಕೆಂದರೆ ಯೆಹೋವನ
ಸಂದೇಶವು ಯಾರಿಗೂ ಭಾರವಾಗ ಬೇಕಾಗಿಲ್ಲ. ಆದರೆ
ನೀವು ನಿಮ್ಮ ದೇವರ ಮಾತುಗಳನ್ನು ತಲೆ ಕೆಳಗೆ ಮಾಡಿ
ದ್ದೀರಿ. ಆತನು ಸರ್ವಶಕ್ತನಾಗಿದ್ದಾನೆ ಮತ್ತು ಜೀವ
ಸ್ವರೂಪನಾದ ದೇವರಾಗಿದ್ದಾನೆ.

37‘‘ನೀವು ದೇವರ ಸಂದೇಶವನ್ನು ತಿಳಿದುಕೊಳ್ಳ
ಬಯಸಿದರೆ ಪ್ರವಾದಿಯನ್ನು ಕುರಿತು ‘ಯೆಹೋವನು
ನಿನಗೆ ಏನೆಂದು ಉತ್ತರವನ್ನು ಕೊಟ್ಟನು’ ಅಥವಾ
‘ಯೆಹೋವನು ಏನು ಹೇಳಿದನು?’ ಎಂದು ಕೇಳಿರಿ.
38ಆದರೆ ‘ಯೆಹೋವನ ಭಾರವೇನು?’ ಎಂದು ಕೇಳ
ಬೇಡಿರಿ. ನೀವು ಆ ಪದಗಳನ್ನು ಬಳಸಿದರೆ ಯೆಹೋವನು
ನಿಮಗೆ ಹೀಗೆ ಹೇಳುವನು. ‘ನೀವು ನನ್ನ ಸಂದೇಶವನ್ನು
‘ಯೆಹೋವನ ಭಾರವೆಂದು’ ಹೇಳಬಾರದಾಗಿತ್ತು. ಆ
ಪದಗಳನ್ನು ಬಳಸಬಾರದೆಂದು ನಾನು ನಿಮಗೆ ಹೇಳಿ
ದ್ದೇನೆ. 39ಆದರೆ ನೀವು ನನ್ನ ಸಂದೇಶವನ್ನು ‘ಭಾರ’
ವೆಂದು ಹೇಳಿದ್ದೀರಿ. ಆದುದರಿಂದ ನಾನು ನಿಮ್ಮನ್ನು
ಒಂದು ಭಾರದಂತೆ ಎತ್ತಿ ನನ್ನಿಂದ ದೂರಕ್ಕೆ ಎಸೆಯು
ತ್ತೇನೆ. ನಾನು ನಿಮ್ಮ ಪೂರ್ವಿಕರಿಗೆ ಜೆರುಸಲೇಮ್
ನಗರವನ್ನು ಕೊಟ್ಟೆ. ಆದರೆ ನಾನು ನಿಮ್ಮನ್ನೂ ಆ
ನಗರವನ್ನೂ ನನ್ನಿಂದ ದೂರ ಎಸೆಯುವೆನು. 40ನಿಮಗೆ
ಶಾಶ್ವತವಾದ ಅಪಕೀರ್ತಿಯನ್ನು ತರುವೆನು. ನೀವು ಈ
ಅವಮಾನವನ್ನು ಎಂದಿಗೂ ಮರೆಯಲಾರಿರಿ.’’’

### ಒಳ್ಳೆಯ ಮತ್ತು ಕೆಟ್ಟ ಅಂಜೂರದ ಹಣ್ಣುಗಳು

24 ಯೆಹೋವನು ನನಗೆ ಈ ವಸ್ತುಗಳನ್ನು
ತೋರಿಸಿದನು: ಯೆಹೋವನ ಪವಿತ್ರಾಲಯದ
ಎದುರುಗಡೆಯಲ್ಲಿ ಅಂಜೂರದ ಎರಡು ಬುಟ್ಟಿಗಳನ್ನು
ಜೋಡಿಸಿಟ್ಟಿದ್ದು ನನಗೆ ಕಂಡು ಬಂತು. (ಬಾಬಿಲೋನಿನ
ರಾಜನಾದ ನೆಬೂಕದ್ನೆಚ್ಚರನು ಯೆಕೊನ್ಯನನ್ನು
ಸೆರೆಹಿಡಿದ ಮೇಲೆ ನಾನು ಈ ದರ್ಶನವನ್ನು ಕಂಡೆ.
ಯೆಕೊನ್ಯನು ರಾಜನಾದ ಯೆಹೋಯಾಕೀಮನ ಮಗ.
ಯೆಕೊನ್ಯನನ್ನು ಮತ್ತು ಅವನ ಪ್ರಮುಖ ಅಧಿಕಾರಿಗಳನ್ನು
ಜೆರುಸಲೇಮಿನಿಂದ ಬಾಬಿಲೋನಿಗೆ ತೆಗೆದುಕೊಂಡು
ಹೋಗಲಾಯಿತು. ನೆಬೂಕದ್ನೆಚ್ಚರನು ಯೆಹೂದದ
ಎಲ್ಲಾ ಬಡಗಿಗಳನ್ನು ಮತ್ತು ಕಮ್ಮಾರರನ್ನು ತೆಗೆದು
ಕೊಂಡು ಹೋಗಿದ್ದನು). 2ಒಂದು ಬುಟ್ಟಿಯಲ್ಲಿ ಬಹಳ
ಉತ್ತಮವಾದ ಅಂಜೂರಗಳಿದ್ದವು. ಆ ಅಂಜೂರಗಳು
ಸುಗ್ಗಿಯಲ್ಲಿ ಬೇಗ ಮಾಗುವ ಹಣ್ಣುಗಳಂತಿದ್ದವು. ಆದರೆ
ಇನ್ನೊಂದು ಬುಟ್ಟಿಯಲ್ಲಿ ತಿನ್ನಲಾಗದಷ್ಟು ಕೊಳೆತ
ಅಂಜೂರಗಳಿದ್ದವು.

3ಯೆಹೋವನು ನನಗೆ ‘‘ಯೆರೆಮೀಯನೇ, ನಿನ
ಗೇನು ಕಾಣುತ್ತಿದೆ?’’ ಎಂದು ಕೇಳಿದನು. ‘‘ನನಗೆ
ಅಂಜೂರಗಳು ಕಾಣುತ್ತಿವೆ. ಒಳ್ಳೆಯ ಅಂಜೂರಗಳು
ಬಹಳ ಚೆನ್ನಾಗಿವೆ. ಕೊಳೆತ ಅಂಜೂರಗಳು ತಿನ್ನಲಾಗ
ದಷ್ಟು ಕೊಳೆತಿವೆ’’ ಎಂದು ನಾನು ಉತ್ತರಿಸಿದೆ.

4ಆಗ ನನಗೆ ಯೆಹೋವನಿಂದ ಸಂದೇಶ ಬಂದಿತು.
5ಇಸ್ರೇಲಿನ ದೇವರಾದ ಯೆಹೋವನು ಹೇಳಿದನು:
‘‘ಯೆಹೂದದ ಜನರನ್ನು ಅವರ ದೇಶದಿಂದ ತೆಗೆದು
ಕೊಂಡು ಹೋಗಲಾಯಿತು. ಅವರ ಶತ್ರು ಅವರನ್ನು
ಬಾಬಿಲೋನಿಗೆ ತಂದನು. ಆ ಜನರು ಈ ಒಳ್ಳೆಯ
ಅಂಜೂರದಂತಿರುವರು. ಆ ಜನರಿಗೆ ನಾನು ದಯೆ
ತೋರುವೆನು. 6ನಾನು ಅವರನ್ನು ರಕ್ಷಿಸುವೆನು. ನಾನು
ಅವರನ್ನು ಪುನಃ ಯೆಹೂದಕ್ಕೆ ಕರೆತರುವೆನು. ನಾನು
ಅವರನ್ನು ಬೀಳಿಸುವದಿಲ್ಲ. ನಾನು ಅವರನ್ನು ಅಭಿವೃದ್ಧಿ
ಪಡಿಸುತ್ತೇನೆ. ನಾನು ಅವರನ್ನು ಕೀಳುವದಿಲ್ಲ. ಅವರನ್ನು
ನೆಟ್ಟು ಬೆಳೆಯುವದಕ್ಕೆ ಅವಕಾಶ ಮಾಡಿಕೊಡುವೆನು.
7ಅವರಲ್ಲಿ ನನ್ನನ್ನು ಅರಿತುಕೊಳ್ಳುವ ಬಯಕೆ ಉಂಟಾಗು
ವಂತೆ ಮಾಡುತ್ತೇನೆ. ನಾನೇ ಯೆಹೋವನು ಎಂಬುದನ್ನು

**ಭಾರ** ಹೀಬ್ರೂ ಭಾಷೆಯಲ್ಲಿ ‘ಸಂದೇಶ’ ಮತ್ತು ‘ಭಾರ’ ಎನ್ನುವದಕ್ಕೆ
ಒಂದೇ ಪದವಿದೆ. ಇದು ಶಬ್ದ ಚಮತ್ಕಾರ.

ಅವರು ತಿಳಿದುಕೊಳ್ಳುವರು. ಅವರು ನನ್ನ ಜನರಾಗು
ವರು ಮತ್ತು ನಾನು ಅವರ ದೇವರಾಗುವೆನು. ನಾನು
ಹೀಗೇಕೆ ಮಾಡುತ್ತೇನೆಂದರೆ ಬಾಬಿಲೋನಿನಲ್ಲಿ ಸೆರೆ
ಯಾಳುಗಳಾಗಿದ್ದ ಜನರು ಮನಃಪೂರ್ವಕವಾಗಿ ನನ್ನ
ಕಡೆಗೆ ತಿರುಗುತ್ತಾರೆ.

8‘‘ಆದರೆ ಯೆಹೂದದ ರಾಜನಾದ ಚಿದ್ಕೀಯನು
ತಿನ್ನಲು ಬಾರದಷ್ಟು ಕೊಳೆತ ಅಂಜೂರದಂತಾಗುವನು.
ಚಿದ್ಕೀಯನೂ ಅವನ ಹಿರಿಯ ಅಧಿಕಾರಿಗಳೂ ಜೆರುಸ
ಲೇಮಿನಲ್ಲಿ ಉಳಿದುಳಿದ ಜನರೂ ಈಜಿಪ್ಟಿನಲ್ಲಿ ವಾಸ
ಮಾಡುತ್ತಿರುವ ಯೆಹೂದದ ಜನರೂ ಕೊಳೆತ
ಅಂಜೂರದಂತಾಗುವರು.

9‘‘ನಾನು ಆ ಜನರನ್ನು ದಂಡಿಸುವೆನು. ಆ ಶಿಕ್ಷೆಯು
ಭೂಲೋಕದ ಎಲ್ಲಾ ಜನರಲ್ಲಿ ಭೀತಿಯನ್ನು ಉಂಟು
ಮಾಡುವುದು. ಜನರು ಯೆಹೂದದ ಜನರನ್ನು ಗೇಲಿ
ಮಾಡುವರು. ನಾನು ಅವರನ್ನು ತಳ್ಳಿದ ಎಲ್ಲಾ ದೇಶಗಳಲ್ಲಿ
ಜನರು ಅವರ ಬಗ್ಗೆ ಪರಿಹಾಸ್ಯದ ಮಾತುಗಳನ್ನು ಆಡು
ವರು; ಅವರನ್ನು ಶಪಿಸುವರು. 10ನಾನು ಖಡ್ಗ, ಕ್ಷಾಮ,
ವ್ಯಾಧಿಗಳನ್ನು ಅವರ ಮೇಲೆ ಕಳುಹಿಸುವೆನು. ಅವರೆ
ಲ್ಲರೂ ಸತ್ತುಹೋಗುವವರೆಗೆ ನಾನು ಅವರ ಮೇಲೆ ಧಾಳಿ
ಮಾಡುವೆನು. ನಾನು ಅವರಿಗೆ ಮತ್ತು ಅವರ ಪೂರ್ವಿಕ
ರಿಗೆ ಕೊಟ್ಟ ಭೂಮಿಯ ಮೇಲೆ ಅವರು ವಾಸಿಸ
ಲಾಗುವದಿಲ್ಲ.’’

### ಯೆರೆಮೀಯನ ಭೋಧನೆಯ ಸಾರಾಂಶ

25 1ಯೆಹೂದದ ಎಲ್ಲಾ ಜನರ ಬಗ್ಗೆ ಯೆರೆಮೀಯ
ನಿಗೆ ಈ ಸಂದೇಶವು ಬಂದಿತು. ಈ ಸಂದೇಶವು
ಯೆಹೂದದ ಯೆಹೋಯಾಕೀಮನ ಆಳ್ವಿಕೆಯ ನಾಲ್ಕ
ನೆಯ ವರುಷದಲ್ಲಿ ಬಂದಿತು. ಯೆಹೋಯಾಕೀಮನು
ಯೋಷೀಯನ ಮಗ. ಅವನ ಆಳ್ವಿಕೆಯ ನಾಲ್ಕನೇ ವರ್ಷ
ದಲ್ಲಿ ಅಂದರೆ ಬಾಬಿಲೋನಿನಲ್ಲಿ ನೆಬೂಕದ್ನೆಚ್ಚರನ
ಆಳ್ವಿಕೆಯ ಮೊದಲನೇ ವರ್ಷದಲ್ಲಿ 2ಯೆರೆಮೀಯನು ಈ
ಸಂದೇಶವನ್ನು ಯೆಹೂದದ ಜನರೆಲ್ಲರಿಗೂ ಜೆರುಸಲೇ
ಮಿನ ಜನರೆಲ್ಲರಿಗೂ ಸಾರಿದನು.

3ಕಳೆದ ಇಪ್ಪತ್ಮೂರು ವರ್ಷಗಳಿಂದ ನಾನು ನಿಮಗೆ ಮತ್ತೆ
ಮತ್ತೆ ಯೆಹೋವನ ಸಂದೇಶವನ್ನು ಕೊಡುತ್ತಿದ್ದೇನೆ.
ಅಮೋನನ ಮಗನಾದ ಯೋಷೀಯನು ಯೆಹೂದದ
ರಾಜನಾದ ಹದಿಮೂರನೆ ವರ್ಷದಿಂದ ನಾನು ಪ್ರವಾದಿ
ಯಾಗಿದ್ದೇನೆ. ಅಂದಿನಿಂದ ಇಂದಿನವರೆಗೆ ನಾನು
ಯೆಹೋವನ ಸಂದೇಶಗಳನ್ನು ನಿಮಗೆ ತಿಳಿಸುತ್ತಾ ಬಂದಿ
ದ್ದೇನೆ. ಆದರೆ ನೀವು ಕಿವಿಗೆ ಹಾಕಿಕೊಂಡಿಲ್ಲ.
4ಯೆಹೋವನು ತನ್ನ ಸೇವಕರಾದ ಪ್ರವಾದಿಗಳನ್ನು ಮತ್ತೆ
ಮತ್ತೆ ನಿಮ್ಮಲ್ಲಿಗೆ ಕಳುಹಿಸಿದ್ದಾನೆ. ಆದರೆ ನೀವು ಅವರ
ಮಾತುಗಳನ್ನು ಕಿವಿಗೆ ಹಾಕಿಕೊಂಡಿಲ್ಲ. ನೀವು ಅವರ
ಕಡೆಗೆ ಸ್ವಲ್ಪವೂ ಗಮನಕೊಟ್ಟಿಲ್ಲ.

5ಆ ಪ್ರವಾದಿಗಳು ‘‘ನಿಮ್ಮ ಜೀವನಕ್ರಮವನ್ನು ಬದಲಾ
ಯಿಸಿಕೊಳ್ಳಿರಿ. ದುಷ್ಕೃತ್ಯಗಳನ್ನು ಮಾಡುವದನ್ನು ನಿಲ್ಲಿಸಿ
ಬಿಡಿ. ನೀವು ಬದಲಾದರೆ, ಯೆಹೋವನು ನಿಮಗೂ
ನಿಮ್ಮ ಪೂರ್ವಿಕರಿಗೂ ಬಹಳ ಹಿಂದೆ ಕೊಟ್ಟ ಭೂಮಿ
ಯಲ್ಲಿ ನೀವು ನೆಲೆಸಬಹುದು. ನೀವು ಶಾಶ್ವತವಾಗಿ ವಾಸಿಸ
ಬೇಕೆಂದು ಆತನು ಈ ಭೂಮಿಯನ್ನು ಕೊಟ್ಟಿದ್ದಾನೆ.
6ಬೇರೆ ದೇವರುಗಳನ್ನು ಅನುಸರಿಸಬೇಡಿರಿ; ಅವುಗಳ
ಸೇವೆ ಮಾಡಬೇಡಿರಿ; ಅವುಗಳನ್ನು ಪೂಜಿಸಬೇಡಿರಿ.
ಮನುಷ್ಯ ನಿರ್ಮಿತವಾದ ವಿಗ್ರಹಗಳನ್ನು ಪೂಜಿಸಬೇಡಿ.
ನೀವು ಪೂಜಿಸಿದರೆ ನಿಮ್ಮ ಮೇಲೆ ನಾನು ಕೋಪಗೊಂಡು
ನಿಮಗೆ ಕೇಡುಮಾಡುವನು.’’

7‘‘ನೀವು ನನ್ನ ಮಾತನ್ನು ಕೇಳಲಿಲ್ಲ.’’ ಇದು
ಯೆಹೋವನ ನುಡಿ. ‘‘ನೀವು ಮನುಷ್ಯನು ಮಾಡಿದ
ವಿಗ್ರಹಗಳನ್ನು ಪೂಜಿಸಿದಿರಿ. ಅದೇ ನನಗೆ ಕೋಪ
ತಂದಿತು. ಅದು ನಿಮಗೇ ಕೇಡನ್ನು ಉಂಟುಮಾಡಿತು.’’

8ಸರ್ವಶಕ್ತನಾದ ಯೆಹೋವನು ಹೀಗೆಂದನು: ‘‘ನೀವು
ನನ್ನ ಸಂದೇಶಗಳನ್ನು ಕೇಳಿ ಅದರಂತೆ ನಡೆಯಲಿಲ್ಲ.
9ಆದುದರಿಂದ ನಾನು ಉತ್ತರದ ಎಲ್ಲಾ ಜನಾಂಗಗಳನ್ನು
ಕರೆಸುತ್ತೇನೆ.’’ ಇದು ಯೆಹೋವನ ಸಂದೇಶ. ‘‘ನಾನು
ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನನ್ನು
ಕೂಡಲೇ ಕರೆಸುವೆನು. ಅವನು ನನ್ನ ಸೇವಕ. ನಾನು ಆ
ಜನರನ್ನು ಯೆಹೂದ ದೇಶದ ವಿರುದ್ಧವಾಗಿಯೂ
ಯೆಹೂದ್ಯರ ವಿರುದ್ಧವಾಗಿಯೂ ತರುತ್ತೇನೆ. ನಾನು
ನಿಮ್ಮ ಸುತ್ತಮುತ್ತಲಿನಲ್ಲಿದ್ದ ಜನಾಂಗಗಳ ವಿರುದ್ಧ
ವಾಗಿಯೂ ಅವರನ್ನು ಕರೆತರುವೆನು. ನಾನು ಆ ದೇಶಗ
ಳನ್ನೆಲ್ಲ ನಾಶಮಾಡುವೆನು. ನಾನು ಆ ಭೂಮಿಗಳನ್ನು
ಶಾಶ್ವತವಾಗಿ ಬರಿದಾದ ಮರುಭೂಮಿಗಳನ್ನಾಗಿ ಮಾಡು
ವೆನು. ಜನರು ಆ ದೇಶಗಳನ್ನು ನೋಡಿ ಅವು ಹಾಳಾಗಿರು
ವುದನ್ನು ಕಂಡು ಬೆರಗಾಗಿ ಸಿಳ್ಳುಹಾಕುವರು. 10ಆ ಸ್ಥಳ
ಗಳಲ್ಲಿ ನಾನು ಸಂತೋಷದ ಮತ್ತು ಸಂಭ್ರಮದ ಧ್ವನಿಗಳು
ಕೇಳಿಬರದಂತೆ ಮಾಡುವೆನು. ವಧುವರರ ಸಂತೋಷದ
ಧ್ವನಿಗಳು ಇನ್ನು ಮೇಲೆ ಕೇಳಿಬರುವದಿಲ್ಲ. ನಾನು ಬೀಸು
ವಕಲ್ಲಿನ ಸದ್ದನ್ನು ತೆಗೆದುಕೊಳ್ಳುವೆನು. ನಾನು ದೀಪದ
ಬೆಳಕನ್ನು ತೆಗೆದುಕೊಳ್ಳುವೆನು. 11ಆ ಇಡೀ ಪ್ರದೇಶವು
ಒಂದು ಮರುಭೂಮಿಯಾಗುವುದು. ಆ ಜನಾಂಗಗಳೆಲ್ಲ
ಎಪ್ಪತ್ತು ವರ್ಷಗಳವರೆಗೆ ಬಾಬಿಲೋನಿನ ರಾಜನ
ಗುಲಾಮರಾಗುವರು.

12‘‘ಆದರೆ ಎಪ್ಪತ್ತು ವರ್ಷಗಳಾದ ಮೇಲೆ ನಾನು
ಬಾಬಿಲೋನಿನ ರಾಜನನ್ನೂ ಜನರನ್ನೂ ದಂಡಿಸು
ವೆನು.’’ ಇದು ಯೆಹೋವನಿಂದ ಬಂದ ಸಂದೇಶ.

‘‘ಅವರ ಪಾಪಗಳಿಗಾಗಿ ನಾನು ಬಾಬಿಲೋನ್ ದೇಶ
ವನ್ನು ದಂಡಿಸುವೆನು. ನಾನು ಶಾಶ್ವತವಾಗಿ ಆ ಭೂಮಿ
ಯನ್ನು ಮರುಭೂಮಿಯನ್ನಾಗಿ ಮಾಡುವೆನು. [13]ಬಾಬಿ
ಲೋನಿಗೆ ಅನೇಕ ಕೇಡುಗಳು ಬರುವವೆಂದು ನಾನು
ಹೇಳಿದ್ದೇನೆ. ಅದೆಲ್ಲ ನಡೆಯುವುದು. ಯೆರೆಮೀಯನು
ಆ ಅನ್ಯಜನಾಂಗಗಳ ಬಗ್ಗೆ ಬೋಧಿಸಿದ್ದಾನೆ. ಆ ಮುನ್ಸೂಚ
ನೆಗಳೆಲ್ಲಾ ಈ ಪುಸ್ತಕದಲ್ಲಿ ಬರೆಯಲ್ಪಟ್ಟಿವೆ. [14]ಹೌದು,
ಬಾಬಿಲೋನಿನ ಜನರು ಅನೇಕ ಜನಾಂಗಗಳ ಮತ್ತು
ಅನೇಕ ಮಹಾರಾಜರ ಸೇವೆ ಮಾಡಬೇಕಾಗುವುದು.
ಅವರು ಮಾಡಲಿರುವ ದುಷ್ಕೃತ್ಯಗಳಿಗೆಲ್ಲ ತಕ್ಕ ಶಿಕ್ಷೆಯನ್ನು
ನಾನು ಅವರಿಗೆ ಕೊಡುವೆನು.’’

## ಜಗತ್ತಿನ ಎಲ್ಲಾ ಜನಾಂಗಗಳ ಬಗ್ಗೆ ನ್ಯಾಯನಿರ್ಣಯ

[15]ಇಸ್ರೇಲಿನ ದೇವರಾದ ಯೆಹೋವನು ನನಗೆ ಹೀಗೆ
ಹೇಳಿದನು: ‘‘ಯೆರೆಮೀಯನೇ, ಈ ಪಾನಪಾತ್ರೆಯನ್ನು
ನನ್ನ ಕೈಯಿಂದ ತೆಗೆದುಕೋ. ಇದು ಕೋಪದ ದ್ರಾಕ್ಷಾ
ರಸ. ನಾನು ನಿನ್ನನ್ನು ವಿವಿಧ ಜನಾಂಗಗಳಲ್ಲಿಗೆ ಕಳುಹಿಸು
ತ್ತಿದ್ದೇನೆ. ಆ ಜನಾಂಗಗಳಿಗೆಲ್ಲಾ ಈ ಪಾತ್ರೆಯ ದ್ರಾಕ್ಷಾರಸ
ವನ್ನು ಕುಡಿಸು. [16]ಅವರು ಈ ದ್ರಾಕ್ಷಾರಸವನ್ನು ಕುಡಿಯು
ವರು. ಆಮೇಲೆ ಅವರು ವಾಂತಿ ಮಾಡಿಕೊಳ್ಳುವರು
ಮತ್ತು ಹುಚ್ಚರಂತೆ ವರ್ತಿಸುವರು. ನಾನು ಬೇಗನೆ ಅವರ
ವಿರುದ್ಧ ಖಡ್ಗವನ್ನು ಕಳುಹಿಸುತ್ತಿರುವುದರಿಂದ ಅವರು
ಹೀಗೆ ಮಾಡುವರು.’’

[17]ನಾನು ಯೆಹೋವನ ಕೈಯಿಂದ ಪಾನಪಾತ್ರೆಯನ್ನು
ತೆಗೆದುಕೊಂಡೆನು. ನಾನು ಆ ಜನಾಂಗಗಳ ಬಳಿಗೆ
ಹೋದೆನು ಮತ್ತು ಆ ಜನರು ಈ ಪಾನಪಾತ್ರೆಯಿಂದ
ಕುಡಿಯುವಂತೆ ಮಾಡಿದೆನು. [18]ನಾನು ಈ ದ್ರಾಕ್ಷಾರಸ
ವನ್ನು ಜೆರುಸಲೇಮಿನ ಮತ್ತು ಯೆಹೂದದ ಜನರಿಗೆ
ಸುರಿದೆನು. ನಾನು ರಾಜನನ್ನು ಮತ್ತು ಯೆಹೂದದ
ನಾಯಕರನ್ನು ಈ ಪಾತ್ರೆಯಲ್ಲಿಯ ದ್ರಾಕ್ಷಾರಸವನ್ನು
ಕುಡಿಯುವಂತೆ ಮಾಡಿದೆನು. ಅವರು ಬರಿದಾದ ಮರು
ಭೂಮಿಯಂತಾಗಲೆಂದು ಹೀಗೆ ಮಾಡಿದೆನು. ಆ ಸ್ಥಳವು
ತುಂಬಾ ಹಾಳಾಗಲಿ, ಜನರು ಅದರ ಬಗ್ಗೆ ಸಿಳ್ಳುಹಾಕಲಿ,
ಶಾಪ ಹಾಕಲಿ ಎಂಬ ಉದ್ದೇಶದಿಂದ ನಾನು ಹಾಗೆ
ಮಾಡಿದೆನು. ಹಾಗೆಯೇ ಆಯಿತು. ಯೆಹೂದವು ಈಗ
ಹಾಗೆಯೇ ಇದೆ. [19]ಈಜಿಪ್ಟಿನ ರಾಜನಾದ ಫರೋಹನು
ಸಹ ಈ ಪಾತ್ರೆಯ ದ್ರಾಕ್ಷಾರಸವನ್ನು ಕುಡಿಯುವಂತೆ
ಮಾಡಿದೆ. ಅವನ ಅಧಿಕಾರಿಗಳೂ ಪ್ರಮುಖ ನಾಯಕರೂ
ಅವನ ಎಲ್ಲಾ ಜನರೂ ಯೆಹೋವನ ಕೋಪದ ಪಾತ್ರೆ
ಯಿಂದ ಕುಡಿಯುವಂತೆ ಮಾಡಿದೆ.

[20]ಎಲ್ಲಾ ಅರಬೀಯರು ಮತ್ತು ಊಚ್ ದೇಶದ ಎಲ್ಲಾ
ರಾಜರು ಪಾನಪಾತ್ರೆಯಿಂದ ಕುಡಿಯುವಂತೆ ಮಾಡಿದೆ.
ಫಿಲಿಷ್ಟಿಯ ದೇಶದ ಎಲ್ಲಾ ರಾಜರು ಅಂದರೆ
ಅಷ್ಕೆಲೋನ್, ಗಾಜಾ, ಎಕ್ರೋನ್ ಮತ್ತು ಅಷ್ಡೋದಿನ
ಶೇಷಭಾಗದ ರಾಜರು ಈ ಪಾನಪಾತ್ರೆಯಿಂದ ಕುಡಿಯು
ವಂತೆ ಮಾಡಿದೆನು.

[21]ಆಮೇಲೆ ಎದೋಮ್ಯರು, ಮೋವಾಬ್ಯರು,
ಅಮ್ಮೋನ್ಯರು ಈ ಪಾತ್ರೆಯ ದ್ರಾಕ್ಷಾರಸವನ್ನು ಕುಡಿಯು
ವಂತೆ ಮಾಡಿದೆನು.

[22]ತೂರಿನ ಮತ್ತು ಚೀದೋನಿನ ಎಲ್ಲಾ ರಾಜರು ಈ
ಪಾತ್ರೆಯಿಂದ ಕುಡಿಯುವಂತೆ ಮಾಡಿದೆ. ಬಹಳ ದೂರ
ದೇಶದ ರಾಜರು ಸಹ ಈ ಪಾತ್ರೆಯಿಂದ ಕುಡಿಯುವಂತೆ
ಮಾಡಿದೆ. [23]ದೆದಾನ್ಯರು, ತೇಮಾದೇಶದವರು, ಬೂಜ್
ದೇಶದವರು ಈ ಪಾತ್ರೆಯಿಂದ ಕುಡಿಯುವಂತೆ ಮಾಡಿದೆ.
ತಮ್ಮ ತಲೆಗೂದಲನ್ನು ಕತ್ತರಿಸಿಕೊಳ್ಳುವ ಎಲ್ಲಾ ಜನರು
ಈ ಪಾತ್ರೆಯಿಂದ ಕುಡಿಯುವಂತೆ ಮಾಡಿದೆ.
[24]ಅರಬೀಯರ ಎಲ್ಲಾ ರಾಜರು ಈ ಪಾತ್ರೆಯಿಂದ ಕುಡಿ
ಯುವಂತೆ ಮಾಡಿದೆ. ಈ ರಾಜರು ಮರುಭೂಮಿಯಲ್ಲಿ
ವಾಸಮಾಡುತ್ತಾರೆ. [25]ನಾನು ಜಿಮ್ರಿಯ ಎಲ್ಲಾ ರಾಜರು,
ಏಲಾಮಿನ ಎಲ್ಲಾ ರಾಜರು, ಮೇದ್ಯರ ಎಲ್ಲಾ ರಾಜರು
ಈ ಪಾತ್ರೆಯಿಂದ ಕುಡಿಯುವಂತೆ ಮಾಡಿದೆನು.
[26]ಉತ್ತರದಲ್ಲಿದ್ದ ಸಮೀಪದಲ್ಲಿದ್ದ ಮತ್ತು ದೂರದಲ್ಲಿದ್ದ
ಎಲ್ಲಾ ರಾಜರನ್ನು ಈ ಪಾತ್ರೆಯಿಂದ ಒಬ್ಬರಾದ ಮೇಲೊ
ಬ್ಬರು ಕುಡಿಯುವಂತೆ ಮಾಡಿದೆನು. ನಾನು ಭೂಮಿಯ
ಮೇಲಿದ್ದ ಎಲ್ಲಾ ರಾಜ್ಯಗಳು ಯೆಹೋವನ ಕೋಪದ
ಪಾತ್ರೆಯಿಂದ ಕುಡಿಯವಂತೆ ಮಾಡಿದೆನು. ಆದರೆ
ಬಾಬಿಲೋನಿನ ರಾಜನು ಎಲ್ಲಾ ದೇಶಗಳವರು ಕುಡಿದ
ತರುವಾಯ ಕುಡಿಯುವನು.

[27]‘‘ಯೆರೆಮೀಯನೇ, ಇಸ್ರೇಲರ ದೇವರೂ ಸರ್ವ
ಶಕ್ತನೂ ಆಗಿರುವ ಯೆಹೋವನು ಹೀಗೆ ಹೇಳುತ್ತಾ
ನೆಂದು ಆ ಜನಾಂಗಗಳಿಗೆ ಹೇಳು: ‘ನನ್ನ ರೋಷದ ಈ
ಪಾತ್ರೆಯಿಂದ ಕುಡಿಯಿರಿ, ಕುಡಿದು ಅಮಲೇರಿ ವಾಂತಿ
ಮಾಡಿಕೊಳ್ಳಿ, ಕೆಳಗೆ ಬಿದ್ದು ಮೇಲಕ್ಕೆ ಏಳದಿರಿ, ಏಕೆಂದರೆ
ನಾನು ನಿಮ್ಮನ್ನು ಕೊಲ್ಲಲು ಒಂದು ಖಡ್ಗವನ್ನು
ಕಳುಹಿಸುತ್ತಿದ್ದೇನೆ.

[28]‘‘ಅವರು ನಿನ್ನ ಕೈಯಿಂದ ಪಾನಪಾತ್ರೆಯನ್ನು ತೆಗೆದು
ಕೊಳ್ಳಲು ಒಪ್ಪುವದಿಲ್ಲ. ಅವರು ಅದನ್ನು ಕುಡಿಯಲು
ಒಪ್ಪುವದಿಲ್ಲ. ಆದರೆ ನೀನು ಅವರಿಗೆ ಹೀಗೆ ಹೇಳು: ನೀವು
ಈ ಪಾತ್ರೆಯಿಂದ ಕುಡಿಯಲೇ ಬೇಕಾಗುವುದೆಂದು ಸರ್ವ
ಶಕ್ತನಾದ ದೇವರು ಹೇಳುತ್ತಾನೆ. [29]ಈಗಾಗಲೆ ನನ್ನ
ಹೆಸರುಗೊಂಡಿರುವ ಜೆರುಸಲೇಮ್ ನಗರಕ್ಕೆ ಕೇಡಾಗು
ವಂತೆ ಮಾಡುತ್ತಿದ್ದೇನೆ. ನಿಮ್ಮನ್ನು ದಂಡನೆಗೆ ಗುರಿ
ಮಾಡಲಾಗುವುದಿಲ್ಲವೆಂದು ನೀವು ಯೋಚಿಸುತ್ತಿರ
ಬಹುದು. ಆದರೆ ನಿಮ್ಮ ಯೋಚನೆ ತಪ್ಪು. ನಿಮ್ಮನ್ನು

ದಂಡಿಸಲಾಗುವುದು. ಈ ಭೂಮಿಯ ಮೇಲಿನ ಜನರೆ
ಲ್ಲರ ಮೇಲೆ ಆಕ್ರಮಣ ಮಾಡಲು ನಾನು ಒಂದು ಖಡ್ಗ
ವನ್ನು ಕರೆಯುತ್ತಿದ್ದೇನೆ.''' ಇದು ಯೆಹೋವನ ಸಂದೇಶ.

30 ''ಯೆರೆಮೀಯನೇ, ನೀನು ಅವರಿಗೆ ಈ ಸಂದೇಶ
ವನ್ನು ಕೊಡು: 'ಉನ್ನತವಾದ ಮತ್ತು ಪವಿತ್ರವಾದ
ಆಲಯದಿಂದ ಯೆಹೋವನು ಗರ್ಜಿಸುವನು.
ಯೆಹೋವನು ಗಟ್ಟಿಯಾಗಿ ಗರ್ಜಿಸಿ ತನ್ನ ಹುಲ್ಲು
ಗಾವಲಿನ ಮಂದೆಯನ್ನು ಬೆದರಿಸುವನು. ದ್ರಾಕ್ಷಾ
ರಸವನ್ನು ತಯಾರಿಸುವಾಗ ದ್ರಾಕ್ಷೆಯ ಹಣ್ಣನ್ನು
ತುಳಿಯುವವರು ಕೂಗಾಡುವಂತೆ ಭಯಂಕರ
ವಾಗಿ ಕೂಗುವನು.
31 ಆ ಧ್ವನಿಯು ಭೂಲೋಕದ ಎಲ್ಲಾ ಕಡೆಗೂ ಹಬ್ಬು
ತ್ತದೆ. ಈ ಧ್ವನಿಯೆಲ್ಲಾ ಏತಕ್ಕೆ? ಯೆಹೋವನು
ಎಲ್ಲಾ ಜನಾಂಗದ ಜನರನ್ನು ದಂಡಿಸುತ್ತಿದ್ದಾನೆ.
ಯೆಹೋವನು ಜನರ ವಿರುದ್ಧ ತನ್ನ ವಾದವನ್ನು
ಹೇಳಿದನು. ಜನರ ಬಗ್ಗೆ ತೀರ್ಪನ್ನು ಕೊಟ್ಟನು.
ಅವನು ದುಷ್ಟರನ್ನು ಖಡ್ಗದಿಂದ ಕೊಲ್ಲುತ್ತಿ
ದ್ದಾನೆ.''' ಈ ಸಂದೇಶವು ಯೆಹೋವನಿಂದ
ಬಂದದ್ದು
32 ''ವಿಪತ್ತುಗಳು ಬಹುಬೇಗ ದೇಶದಿಂದ ದೇಶಕ್ಕೆ
ಹರಡುವವು. ಅವು ಭೂಲೋಕದ ಎಲ್ಲಾ ದೂರ
ದೂರದ ದೇಶಗಳಲ್ಲಿ ಭಯಂಕರವಾದ ಬಿರು
ಗಾಳಿಯಂತೆ ಬರುವವು.''

33 ಆ ಜನರ ಮೃತ ಶರೀರಗಳು ದೇಶದ ಒಂದು ಕೊನೆ
ಯಿಂದ ಇನ್ನೊಂದು ಕೊನೆಯವರೆಗೆ ಬಿದ್ದಿರುವವು. ಆ
ಸತ್ತಜನರಿಗಾಗಿ ಯಾರೂ ಅಳುವದಿಲ್ಲ. ಯಾರೂ ಅವರ
ಶವಗಳನ್ನು ಒಟ್ಟುಗೂಡಿಸಿ ಹೂಳುವದಿಲ್ಲ. ಅವುಗಳು
ಭೂಮಿಯ ಮೇಲೆ ಗೊಬ್ಬರದಂತೆ ಬಿದ್ದಿರುವವು.

34 ಕುರುಬರೇ, ನೀವು ಕುರಿಗಳಿಗೆ (ಜನಗಳಿಗೆ)
ಮುಂದಾಳಾಗಿ ನಡೆಯಬೇಕು. ಮಹಾನಾಯ
ಕರೇ, ನೀವು ಗೋಳಾಡಲು ಪ್ರಾರಂಭಿಸಿರಿ. ಕುರಿ
ಗಳ ಮುಂದಾಳುಗಳಾದ ನೀವು ನೋವಿನಿಂದ
ನೆಲದ ಮೇಲೆ ಹೊರಳಾಡಿರಿ. ಏಕೆಂದರೆ ಈಗ
ನಿಮ್ಮನ್ನು ವಧಿಸುವ ಕಾಲ ಬಂದಿದೆ. ನಾನು ನಿಮ್ಮ
ಕುರಿಗಳನ್ನು ದಿಕ್ಕಾಪಾಲು ಮಾಡಿಬಿಡುತ್ತೇನೆ. ಅವು
ಗಳು ಒಡೆದ ಪಾತ್ರೆಯ ಚೂರುಗಳಂತೆ ಚೆಲ್ಲಾಪಿಲ್ಲಿ
ಯಾಗುತ್ತವೆ.
35 ಕುರುಬರಿಗೆ ಅಡಗಿಕೊಳ್ಳಲು ಸ್ಥಳ ಸಿಕ್ಕುವದಿಲ್ಲ. ಆ
ನಾಯಕರುಗಳಿಗೆ ತಪ್ಪಿಸಿಕೊಳ್ಳಲು ಅವಕಾಶ
ಸಿಕ್ಕುವದಿಲ್ಲ.
36 ಕುರುಬರ ಕೂಗಾಟ ನನಗೆ ಕೇಳುತ್ತಿದೆ. ಕುರಿಗಳ
ಗೋಳಾಟ ನನಗೆ ಕೇಳಿಬರುತ್ತಿದೆ. ಯೆಹೋವನು
ಅವರ ದೇಶವನ್ನು ನಾಶಮಾಡುತ್ತಿದ್ದಾನೆ.
37 ನೆಮ್ಮದಿಯಿಂದ ಕೂಡಿದ ಆ ಹುಲ್ಲುಗಾವಲುಗಳು
ಬರಿದಾದ ಮರುಭೂಮಿಗಳಂತಾಗಿವೆ. ಏಕೆಂದರೆ
ಯೆಹೋವನು ತುಂಬಾ ಕೋಪಗೊಂಡಿದ್ದಾನೆ.

38 ''ಯೆಹೋವನು, ತನ್ನ ಗುಹೆಯಿಂದ ಹೊರ ಬರು
ತ್ತಿರುವ ಭಯಂಕರವಾದ ಸಿಂಹದಂತಿದ್ದಾನೆ.
ಯೆಹೋವನು ಕೋಪಗೊಂಡಿದ್ದಾನೆ. ಯೆಹೋ
ವನ ಕೋಪವು ಆ ಜನರನ್ನು ಪೀಡಿಸುವುದು.
ಅವರ ದೇಶವು ಬರಿದಾದ ಮರುಭೂಮಿ
ಯಾಗುವುದು.

26 ಯೆಹೋಯಾಕೀಮನು ಯೆಹೂದದ ರಾಜ
ನಾದ ಮೊದಲನೇ ವರ್ಷದಲ್ಲಿ ಯೆಹೋವನಿಂದ
ಈ ಸಂದೇಶ ಬಂದಿತು. ಯೆಹೋಯಾಕೀಮನು ರಾಜ
ನಾದ ಯೋಷೀಯನ ಮಗನಾಗಿದ್ದನು.
2 ಯೆಹೋವನು
ಇಂತೆಂದನು, ''ಯೆರೆಮೀಯನೇ, ಯೆಹೋವನ ಆಲ
ಯದ ಅಂಗಳದಲ್ಲಿ ನಿಲ್ಲು, ಯೆಹೋವನ ಆಲಯದಲ್ಲಿ
ಆರಾಧನೆಗೆಂದು ಬರುವ ಯೆಹೂದದ ಎಲ್ಲಾ ಜನರಿಗೆ
ಈ ಸಂದೇಶವನ್ನು ತಿಳಿಸು. ನಾನು ನಿನಗೆ ತಿಳಿಸೆಂದು
ಹೇಳುವ ಎಲ್ಲವನ್ನೂ ಅವರಿಗೆ ಹೇಳು. ನನ್ನ ಸಂದೇಶದ
ಯಾವ ಭಾಗವನ್ನೂ ಬಿಡಬೇಡ.
3 ಅವರು ನನ್ನ ಸಂದೇಶ
ವನ್ನು ಕೇಳಿ ಅದರಂತೆ ನಡೆಯಬಹುದು; ತಮ್ಮ ಕೆಟ್ಟ
ಜೀವನವನ್ನು ತ್ಯಜಿಸಿ ಸನ್ಮಾರ್ಗವನ್ನು ಹಿಡಿಯಬಹುದು.
ಅವರು ಪರಿವರ್ತನೆ ಹೊಂದಿದರೆ ನಾನು ಅವರನ್ನು ಶಿಕ್ಷಿಸ
ಬೇಕೆಂದು ಮಾಡಿದ ಯೋಚನೆಗಳನ್ನು ಬದಲಾಯಿಸು
ವೆನು. ಅವರು ಅನೇಕ ದುಷ್ಕೃತ್ಯಗಳನ್ನು ಮಾಡಿದ್ದರಿಂದ
ಅವರನ್ನು ಶಿಕ್ಷಿಸಬೇಕೆಂದು ನಾನು ಯೋಚಿಸುತ್ತಿದ್ದೇನೆ.
4 ನೀನು ಅವರಿಗೆ ಹೀಗೆ ಹೇಳು: 'ಯೆಹೋವನು ಇಂತೆನ್ನು
ತ್ತಾನೆ: ನಾನು ನಿಮಗೆ ನನ್ನ ಧರ್ಮೋಪದೇಶಗಳನ್ನು
ಕೊಟ್ಟಿದ್ದೇನೆ. ನೀವು ಅವುಗಳನ್ನು ಪಾಲಿಸಬೇಕು;
ಅನುಸರಿಸಬೇಕು.
5 ನನ್ನ ಸೇವಕರು ಹೇಳುವುದನ್ನು ನೀವು
ಕೇಳಬೇಕು. ಪ್ರವಾದಿಗಳು ನನ್ನ ಸೇವಕರಾಗಿದ್ದಾರೆ.
ನಾನು ಮತ್ತೆ ಮತ್ತೆ ನನ್ನ ಪ್ರವಾದಿಗಳನ್ನು ನಿಮ್ಮಲ್ಲಿಗೆ
ಕಳುಹಿಸಿದೆನು. ಆದರೆ ನೀವು ಅವರ ಮಾತುಗಳಿಗೆ ಕಿವಿ
ಗೊಡಲಿಲ್ಲ.
6 ನೀವು ನನ್ನ ಆಜ್ಞಾಪಾಲನೆ ಮಾಡದಿದ್ದರೆ
ಜೆರುಸಲೇಮಿನ ನನ್ನ ಈ ಆಲಯಕ್ಕೆ ಶಿಲೋವಿನ ನನ್ನ
ಪವಿತ್ರವಾದ ಗುಡಾರದ ಗತಿಯನ್ನು ತರುತ್ತೇನೆ. ಜಗತ್ತಿನ
ಜನರು ಬೇರೆ ನಗರಗಳಿಗೆ ದುರ್ಗತಿ ಬರಲಿ ಎಂದು ಕೇಳಿ
ಕೊಳ್ಳುವಾಗ ಜೆರುಸಲೇಮನ್ನು ಜ್ಞಾಪಿಸಿ ಕೊಳ್ಳುವರು.''

[7]ಯೆಹೋವನ ಆಲಯದಲ್ಲಿ ಯೆರೆಮೀಯನು
ಹೇಳಿದ ಇದೆಲ್ಲವನ್ನು ಯಾಜಕರು, ಪ್ರವಾದಿಗಳು ಮತ್ತು
ಎಲ್ಲಾ ಜನರು ಕೇಳಿದರು. [8]ಯೆಹೋವನು ಜನರಿಗೆ
ತಿಳಿಸಬೇಕೆಂದು ಹೇಳಿದ ಎಲ್ಲವನ್ನು ಯೆರೆಮೀಯನು
ಹೇಳಿ ಮುಗಿಸಿದನು. ಆಗ ಯಾಜಕರು, ಪ್ರವಾದಿಗಳು
ಮತ್ತು ಎಲ್ಲಾ ಜನರು ಯೆರಮೀಯನನ್ನು ಹಿಡಿದು
ಕೊಂಡರು. ಅವರು ''ನೀನು ಇಂಥಾ ಭಯಂಕರವಾದ
ವಿಷಯವನ್ನು ಹೇಳಿದ್ದಕ್ಕಾಗಿ ನಿನಗೆ ಮರಣವೇ ಗತಿ?
[9]ಯೆಹೋವನ ಹೆಸರಿನಲ್ಲಿ ಹಾಗೆ ಪ್ರವಾದಿಸಲು ನಿನಗೆ
ಹೇಗೆ ಧೈರ್ಯ ಬಂದಿತು? ಶಿಲೋವಿನಂತೆ ಯೆಹೋವನ
ಈ ಆಲಯವು ಹಾಳಾಗುವದೆಂದು ಹೇಳಲು ನಿನಗೆ ಹೇಗೆ
ಧೈರ್ಯ ಬಂದಿತು? ಜೆರುಸಲೇಮು ಜನರಿಲ್ಲದ ಒಂದು
ಮರುಭೂಮಿಯಾಗುವುದೆಂದು ಹೇಳಲು ನಿನಗೆ ಹೇಗೆ
ಧೈರ್ಯ ಬಂದಿತು?'' ಎಂದು ಕೇಳಿದರು. ಯೆಹೋವನ
ಆಲಯದಲ್ಲಿ ಎಲ್ಲಾ ಜನರು ಯೆರೆಮೀಯನನ್ನು
ಮುತ್ತಿದರು.

[10]ನಡೆಯುತ್ತಿರುವ ಎಲ್ಲಾ ಘಟನೆಗಳ ಬಗ್ಗೆ ಯೆಹೂ
ದದ ಅಧಿಪತಿಗಳು ಕೇಳಿದರು. ಅವರು ರಾಜನ ಅರಮನೆ
ಯಿಂದ ಹೊರಗೆ ಬಂದರು. ಅವರು ಯೆಹೋವನ
ಆಲಯದವರೆಗೆ ಹೋದರು. ಅಲ್ಲಿ ಅವರು ಹೊಸ
ಬಾಗಿಲಿನಲ್ಲಿದ್ದ ತಮ್ಮ ಆಸನಗಳಲ್ಲಿ ಕುಳಿತುಕೊಂಡರು.
ಹೊಸಬಾಗಿಲಿನಿಂದ ದಾರಿ ಯೆಹೋವನ ಆಲಯಕ್ಕೆ
ಹೋಗುತ್ತದೆ. [11]ಆಗ ಯಾಜಕರು ಮತ್ತು ಪ್ರವಾದಿಗಳು
ಅಧಿಪತಿಗಳಿಗೂ ಇನ್ನುಳಿದ ಜನರಿಗೂ ಹೀಗೆ ಹೇಳಿದರು:
''ಯೆರೆಮೀಯನನ್ನು ಕೊಲ್ಲಬೇಕು. ಅವನು ಜೆರುಸ
ಲೇಮಿನ ಬಗ್ಗೆ ಕೆಟ್ಟ ಮಾತುಗಳನ್ನಾಡಿದ್ದಾನೆ. ಅವನು
ಆಡಿದ ಆ ಮಾತುಗಳನ್ನು ನೀವೇ ಕೇಳಿದ್ದೀರಿ.''

[12]ಆಗ ಯೆರೆಮೀಯನು ಯೆಹೂದದ ಸಕಲ ಸರದಾರ
ರಿಗೂ ಸಮಸ್ತ ಜನರಿಗೂ ಹೀಗೆ ಹೇಳಿದನು: ''ಈ
ಆಲಯದ ಬಗ್ಗೆ ಮತ್ತು ಈ ನಗರದ ಬಗ್ಗೆ ಹೀಗೆ ಹೇಳಲು
ಯೆಹೋವನು ನನ್ನನ್ನು ಕಳುಹಿಸಿಕೊಟ್ಟಿದ್ದಾನೆ. ನೀವು
ಕೇಳಿದ ಪ್ರತಿಯೊಂದು ವಿಷಯವೂ ಯೆಹೋವ
ನಿಂದಲೇ ಬಂದದ್ದು. [13]ನೀವು ನಿಮ್ಮ ನಡತೆಯನ್ನು ಬದ
ಲಾಯಿಸಿಕೊಂಡು, ಸತ್ಕಾರ್ಯಗಳನ್ನು ಮಾಡಲಾರಂಭಿಸ
ಬೇಕು. ನೀವು ನಿಮ್ಮ ದೇವರಾದ ಯೆಹೋವನ ಆಜ್ಞಾ
ಪಾಲನೆ ಮಾಡಬೇಕು. ಆಗ ಯೆಹೋವನು ತನ್ನ ಮನ
ಸ್ಸನ್ನು ಬದಲಾಯಿಸಿ ನಿಮಗೆ ಕೇಡು ಮಾಡುವುದಿಲ್ಲ.
[14]ನಾನಂತೂ ನಿಮ್ಮ ಅಧೀನದಲ್ಲಿದ್ದೇನೆ. ನಿಮಗೆ ಒಳ್ಳೆಯ
ದಾಗಿಯೂ ನ್ಯಾಯವಾಗಿಯೂ ತೋರಿದ್ದನ್ನು ಮಾಡಿರಿ.
[15]ಆದರೆ ನೀವು ನನ್ನನ್ನು ಕೊಂದರೆ ಒಬ್ಬ ನಿರಾಪರಾಧಿ
ಯನ್ನು ಕೊಂದ ದೋಷಕ್ಕೆ ಗುರಿಯಾಗುವಿರೆಂಬುದನ್ನು
ಸ್ಪಷ್ಟವಾಗಿ ತಿಳಿದುಕೊಳ್ಳಿರಿ. ನೀವು ಈ ನಗರವನ್ನೂ ಇದರ
ಪ್ರತಿಯೊಬ್ಬ ನಿವಾಸಿಯನ್ನೂ ಸಹ ದೋಷಿಗಳನ್ನಾಗಿ
ಮಾಡುವಿರಿ. ನಿಜವಾಗಿಯೂ ಯೆಹೋವನು ನನ್ನನ್ನು
ನಿಮ್ಮಲ್ಲಿಗೆ ಕಳಿಸಿದ್ದಾನೆ. ನೀವು ಕೇಳಿದ ಸಂದೇಶವು
ನಿಜವಾಗಿಯೂ ಯೆಹೋವನಿಂದ ಬಂದದ್ದು.''

[16]ಆಗ ಸರದಾರರು ಮತ್ತು ಸಮಸ್ತ ಜನರು ಒಬ್ಬರಿ
ಗೊಬ್ಬರು ಮಾತನಾಡಿ ಯಾಜಕರಿಗೂ ಪ್ರವಾದಿಗಳಿಗೂ
''ಯೆರೆಮೀಯನನ್ನು ಕೊಲ್ಲಕೂಡದು. ಯೆರೆಮೀ
ಯನು ನಮಗೆ ಹೇಳಿದ ಸಂಗತಿಗಳು ನಮ್ಮ ದೇವರಾದ
ಯೆಹೋವನಿಂದ ಬಂದವುಗಳಾಗಿವೆ'' ಎಂದು
ಹೇಳಿದರು.

[17]ಆಗ ಹಿರಿಯ ನಾಯಕರಲ್ಲಿ ಕೆಲವರು ಎದ್ದುನಿಂತು
ಎಲ್ಲಾ ಜನರನ್ನುದ್ದೇಶಿಸಿ [18]ಹೀಗೆ ಹೇಳಿದರು, ''ಪ್ರವಾದಿ
ಯಾದ ಮೀಕಾಯನು ಮೋರೆಷೆತ್ ನಗರದವನಾಗಿ
ದ್ದನು. ಹಿಜ್ಕೀಯನು ಯೆಹೂದದ ರಾಜನಾಗಿದ್ದ ಕಾಲ
ದಲ್ಲಿ ಮೀಕಾಯನು ಪ್ರವಾದಿಯಾಗಿದ್ದನು. ಯೆಹೂ ದದ
ಸಮಸ್ತ ಜನರಿಗೆ ಮೀಕಾಯನು ಹೀಗೆ ಹೇಳಿದನು:

ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ,
''ಚೀಯೋನ್ ನಗರವು ನೇಗಿಲಹೊಡೆದ ಹೊಲ
ವಾಗುವುದು. ಜೆರುಸಲೇಮ್ ನಗರವು ಕಲ್ಲಿನ
ದಿಬ್ಬವಾಗುವುದು. ಪವಿತ್ರ ಆಲಯವಿದ್ದ ಪರ್ವತವು
ಮರಗಿಡಗಳಿಂದ ಮುಚ್ಚಿಹೋಗುವುದು.''

ಮೀಕ 3:12

[19]''ಹಿಜ್ಕೀಯನು ಯೆಹೂದದ ರಾಜನಾಗಿದ್ದನು.
ಹಿಜ್ಕೀಯನು ಮೀಕಾಯನ ಕೊಲೆ ಮಾಡಲಿಲ್ಲ. ಯೆಹೂ
ದದ ಯಾರೂ ಮೀಕಾಯನ ಕೊಲೆ ಮಾಡಲಿಲ್ಲ.
ಹಿಜ್ಕೀಯನು ಯೆಹೋವನನ್ನು ಗೌರವಿಸುತ್ತಿದ್ದ
ನೆಂಬುದು ನಿಮಗೆ ಗೊತ್ತು. ಅವನು ಯೆಹೋವನನ್ನು
ಸಂತೋಷಪಡಿಸ ಬಯಸಿದನು. ಯೆಹೂದಕ್ಕೆ ಕೇಡನ್ನು
ತರುವೆನೆಂದು ಯೆಹೋವನು ಹೇಳಿದ್ದನು. ಆದರೆ
ಹಿಜ್ಕೀಯನು ಯೆಹೋವನನ್ನು ಪ್ರಾರ್ಥಿಸಿದನು.
ಯೆಹೋವನು ತನ್ನ ಮನಸ್ಸನ್ನು ಬದಲಾಯಿಸಿ ಕೇಡನ್ನು
ಬರಮಾಡಲಿಲ್ಲ. ನಾವು ಯೆರೆಮೀಯನನ್ನು ಕೊಂದರೆ
ಅನೇಕ ಕಷ್ಟಗಳನ್ನು ತಂದುಕೊಳ್ಳುವೆವು. ಆ ಕಷ್ಟಗಳಿಗೆ
ನಮ್ಮ ತಪ್ಪೇ ಕಾರಣವಾಗುವುದು.''

[20]ಮೊದಲು ಯೆಹೋವನ ಸಂದೇಶವನ್ನು ಪ್ರವಾದಿ
ಸುವ ಇನ್ನೊಬ್ಬ ಮನುಷ್ಯನಿದ್ದನು. ಅವನ ಹೆಸರು
ಊರೀಯ. ಅವನು ಶಮಾಯನ ಮಗ. ಊರೀಯನು
ಕಿರ್ಯತ್‌ಯಾರೀಮ್ ಎಂಬ ಊರಿನವನು. ಈ ನಗ
ರದ ಬಗ್ಗೆ ಮತ್ತು ಪ್ರದೇಶದ ಬಗ್ಗೆ ಯೆರೆಮೀಯನು
ಪ್ರವಾದಿಸಿದ್ದನ್ನೇ ಊರೀಯನು ಪ್ರವಾದಿಸಿದ್ದನು.

[21]ರಾಜನಾದ ಯೆಹೋಯಾಕೀಮನೂ ಅವನ ಸೇನೆಯ
ಅಧಿಕಾರಿಗಳೂ ಯೆಹೂದದ ನಾಯಕರೂ ಊರೀ
ಯನ ಪ್ರವಾದನೆಯನ್ನು ಕೇಳಿದರು. ಅವರಿಗೆ ಕೋಪ
ಬಂದಿತು. ರಾಜನಾದ ಯೆಹೋಯಾಕೀಮನು
ಊರೀಯನನ್ನು ಕೊಲ್ಲಬಯಸಿದನು. ಆದರೆ ಯೆಹೋ
ಯಾಕೀಮನು ತನ್ನನ್ನು ಕೊಲ್ಲಬಯಸುತ್ತಾನೆಂದು
ಊರೀಯನು ಕೇಳಿದನು. ಊರೀಯನು ಭಯಪಟ್ಟು
ತಪ್ಪಿಸಿಕೊಂಡು ಈಜಿಪ್ಟ್ ದೇಶಕ್ಕೆ ಹೋದನು. [22]ಆದರೆ
ರಾಜನಾದ ಯೆಹೋಯಾಕೀಮನು ಎಲ್ನಾತಾನನನ್ನೂ
ಅವನ ಸಂಗಡ ಇನ್ನೂ ಕೆಲವರನ್ನು ಈಜಿಪ್ಟಿಗೆ ಕಳುಹಿಸಿ
ದನು. ಎಲ್ನಾತಾನನು ಆಕ್ಬೋರನ ಮಗ. [23]ಅವರು
ಊರೀಯನನ್ನು ಈಜಿಪ್ಟಿನಿಂದ ತಂದರು. ಅವರು
ಊರೀಯನನ್ನು ರಾಜನಾದ ಯೆಹೋಯಾಕೀಮನ
ಹತ್ತಿರ ತೆಗೆದುಕೊಂಡು ಹೋದರು. ಯೆಹೋಯಾಕೀ
ಮನು ಕತ್ತಿಯಿಂದ ಊರೀಯನ ಕೊಲೆ ಮಾಡ
ಬೇಕೆಂದು ಆಜ್ಞಾಪಿಸಿದನು. ಊರೀಯನ ದೇಹವನ್ನು
ಬಡವರ ಸ್ಮಶಾನದಲ್ಲಿ ಎಸೆಯಲಾಯಿತು.

[24]ಶಾಫಾನನ ಮಗನಾದ ಅಹೀಕಾಮನು ಒಬ್ಬ
ಪ್ರಮುಖ ವ್ಯಕ್ತಿಯಾಗಿದ್ದನು. ಅಹೀಕಾಮನು ಯೆರೆಮೀ
ಯನಿಗೆ ಬೆಂಬಲಕೊಟ್ಟನು; ಯಾಜಕರು ಮತ್ತು ಪ್ರವಾದಿ
ಗಳು ಅವನನ್ನು ಕೊಲ್ಲದಂತೆ ಕಾಪಾಡಿದನು.

## ಯೆಹೋವನು ನೆಬೂಕದ್ನೆಚ್ಚರನನ್ನು ರಾಜನನ್ನಾಗಿ ಮಾಡಿದ್ದು

27 ಯೆರೆಮೀಯನಿಗೆ ಯೆಹೋವನಿಂದ ಒಂದು
ಸಂದೇಶ ಬಂದಿತು. ಯೆಹೂದದ ರಾಜನಾದ
ಚಿದ್ಕೀಯನ ಆಳ್ವಿಕೆಯ ನಾಲ್ಕನೇ ವರ್ಷದಲ್ಲಿ ಈ ಸಂದೇಶ
ಬಂದಿತು. ಚಿದ್ಕೀಯನು ರಾಜನಾಗಿದ್ದ ಯೋಷೀಯನ
ಮಗ.* [2]ಯೆಹೋವನು ನನಗೆ ಹೀಗೆ ಹೇಳಿದನು:
‘‘ನೀನು ಮರದ ಕಂಬದಿಂದ ಕೆಲವು ನೊಗಗಳನ್ನು ಮಾಡಿ
ನಿನ್ನ ಕತ್ತಿನ ಹಿಂಬದಿಯ ಮೇಲೆ ಇಟ್ಟುಕೋ.

[3]ತರುವಾಯ ಎದೋಮಿನ ರಾಜ, ಮೋವಾಬಿನ
ರಾಜ, ಅಮ್ಮೋನ್ಯರ ರಾಜ, ತೂರಿನ ರಾಜ, ಚೀದೋನಿನ
ರಾಜ ಇವರುಗಳಿಗೆ ಅವುಗಳನ್ನು ಕಳಿಸು. ಯೆಹೂದದ
ರಾಜನಾದ ಚಿದ್ಕೀಯ ನನ್ನು ನೋಡಲು ಬಂದ ಈ
ರಾಜರ ರಾಯಭಾರಿಗಳ ಮೂಲಕ ಸಂದೇಶವನ್ನು
ಕಳಿಸು. [4]ಈ ಸಂದೇಶವನ್ನು ತಮ್ಮ ಒಡೆಯರಿಗೆ
ತಿಳಿಸಬೇಕೆಂದು ಆ ರಾಯಭಾರಿಗಳಿಗೆ ಹೇಳು. ಅವರಿಗೆ
ಹೀಗೆ ಹೇಳು: ‘ಇಸ್ರೇಲಿನ ದೇವರು ಸರ್ವಶಕ್ತನೂ
ಆಗಿರುವ ಯೆಹೋವನು ಹೀಗೆ ಹೇಳುತ್ತಾನೆ ಎಂದು
ನಿಮ್ಮ ಒಡೆಯರಿಗೆ ತಿಳಿಸಿ. [5]ನಾನು ಭೂಮಿಯನ್ನೂ
ಮತ್ತು ಅದರ ಮೇಲಿರುವ ಎಲ್ಲಾ ಜನರನ್ನೂ ಸೃಷ್ಟಿಸಿದೆ.
ನಾನು ಭೂಮಿಯ ಮೇಲಿನ ಎಲ್ಲಾ ಪ್ರಾಣಿಗಳನ್ನು
ಸೃಷ್ಟಿಸಿದೆ. ನಾನು ಇದನ್ನು ನನ್ನ ಮಹಾಶಕ್ತಿಯಿಂದಲೂ
ಬಲವಾದ ತೋಳುಗಳಿಂದಲೂ ಸೃಷ್ಟಿಸಿದೆ. ನಾನು ಆ
ಭೂಮಿಯನ್ನು ನನ್ನ ಮನಸ್ಸಿಗೆ ಬಂದವರಿಗೆ ಕೊಡ
ಬಹುದು. [6]ಈಗ ನಾನು ನಿಮ್ಮೆಲ್ಲ ದೇಶಗಳನ್ನು ಬಾಬಿ
ಲೋನಿನ ರಾಜನಾದ ನೆಬೂಕದ್ನೆಚ್ಚರನಿಗೆ ಒಪ್ಪಿಸಿದ್ದೇನೆ.
ಅವನು ನನ್ನ ಸೇವಕನಾಗಿದ್ದಾನೆ. ಕಾಡು ಪ್ರಾಣಿಗಳು ಸಹ
ಅವನ ಆಜ್ಞೆಯನ್ನು ಪಾಲಿಸುವಂತೆ ಮಾಡುವೆನು. [7]ಎಲ್ಲಾ
ಜನಾಂಗಗಳು ನೆಬೂಕದ್ನೆಚ್ಚರನ, ಅವನ ಮಗನ ಮತ್ತು
ಅವನ ಮೊಮ್ಮಗನ ಸೇವೆಮಾಡುವವು. ಆ ಮೇಲೆ
ಬಾಬಿಲೋನನ್ನು ಸೋಲಿಸುವ ಸಮಯ ಬರುತ್ತದೆ.
ಅನೇಕ ಜನಾಂಗಗಳು ಮತ್ತು ದೊಡ್ಡ ರಾಜರು
ಬಾಬಿಲೋನನ್ನು ತಮ್ಮ ಸೇವಕನನ್ನಾಗಿ ಮಾಡಿ
ಕೊಳ್ಳುವರು.

[8]‘‘‘ಆದರೆ ಈಗ ಕೆಲವು ಜನಾಂಗಗಳು ಅಥವಾ ರಾಜ್ಯ
ಗಳು ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನನ್ನು
ಸೇವಿಸಲು ಒಪ್ಪಲಿಲ್ಲ. ಅವುಗಳು ಅವನ ನೊಗವನ್ನು ತಮ್ಮ
ಕತ್ತಿನ ಮೇಲೆ ಇಟ್ಟುಕೊಳ್ಳಲು ಒಪ್ಪಲಿಲ್ಲ. ಆದುದರಿಂದ
ನಾನು ಆ ಜನಾಂಗವನ್ನು ಖಡ್ಗ, ಹಸಿವು ಮತ್ತು ಭಯಂಕರ
ವ್ಯಾಧಿಗಳಿಂದ ಶಿಕ್ಷಿಸುತ್ತೇನೆ.’’’ ಇದು ಯೆಹೋವನಿಂದ
ಬಂದ ಸಂದೇಶ. ‘‘‘ನಾನು ಆ ಜನಾಂಗವನ್ನು ನಾಶ
ಗೊಳಿಸುವವರೆಗೂ ಹಾಗೆ ಮಾಡುವೆನು. ಅವನ ವಿರುದ್ಧ
ಹೋರಾಡುವ ಜನಾಂಗವನ್ನು ನಾಶಮಾಡುವದಕ್ಕಾಗಿ
ನಾನು ನೆಬೂಕದ್ನೆಚ್ಚರನನ್ನು ಉಪಯೋಗಿಸುತ್ತೇನೆ.
[9]ಆದುದರಿಂದ ನಿಮ್ಮ ಪ್ರವಾದಿಗಳ ಮಾತುಗಳನ್ನು
ಕೇಳಬೇಡಿರಿ. ಮಾಟಮಂತ್ರಗಳನ್ನು ಬಳಸಿ ಭವಿಷ್ಯವನ್ನು
ಹೇಳುವವರ ಮಾತುಗಳನ್ನು ಕೇಳಬೇಡಿರಿ. ಕನಸುಗಳ
ಗೂಢಾರ್ಥವನ್ನು ಹೇಳುವೆನೆಂಬ ಜನರ ಮಾತುಗಳನ್ನು
ಕೇಳಬೇಡಿರಿ. ಸತ್ತವರೊಡನೆ ಮಾತನಾಡುವ ಅಥವಾ
ಮಾಟಮಂತ್ರ ಮಾಡುವ ಜನರ ಮಾತುಗಳನ್ನು ಕೇಳ
ಬೇಡಿರಿ. ಅವರೆಲ್ಲರೂ ‘‘ನೀವು ಬಾಬಿಲೋನಿನ ರಾಜ
ನಿಗೆ ಗುಲಾಮರಾಗುವದಿಲ್ಲ’’ ಎಂದು ಹೇಳುವರು.
[10]ಆದರೆ ಅವರು ನಿಮಗೆ ಹೇಳುವುದು ಸುಳ್ಳುಗಳೇ.
ಅವರು ನಿಮ್ಮನ್ನು ನಿಮ್ಮ ದೇಶದಿಂದ ಬಹುದೂರ ತೆಗೆದು
ಕೊಂಡು ಹೋಗುವರು. ನಾನು ನಿಮ್ಮನ್ನು ನಿಮ್ಮ ದೇಶ
ದಿಂದ ಬಲವಂತವಾಗಿ ಹೊರಗಟ್ಟುವೆನು. ನೀವು ಅನ್ಯ
ದೇಶದಲ್ಲಿ ಸಾಯುವಿರಿ.

[11]‘‘‘ಆದರೆ ಬಾಬಿಲೋನ್ ರಾಜನ ನೊಗಕ್ಕೆ ತಮ್ಮ

---

**ಯೆರೆಮೀಯ … ಮಗನು** ಹೀಬ್ರೂವಿನಲ್ಲಿ ಇಂತಿದೆ: ‘‘ಯೆಹೋಯಾಕೀಮನ ಆಳ್ವಿಕೆಯ ಆರಂಭದಲ್ಲಿ’’ ಎಂದಿದೆ. ಬಹುಶಃ ಇದು ನಕಲು ಪ್ರತಿಗಾರರು ಮಾಡಿದ ತಪ್ಪಾಗಿದ್ದಿರಬೇಕು. ಮೂರನೆ ವಚನದಲ್ಲಿ ಚಿದ್ಕೀಯನ ಬಗ್ಗೆ ಹೇಳಲಾಗಿದೆ. ಯೆರೆಮೀಯ28:1 ರಲ್ಲಿ ನಾಲ್ಕನೆ ವರ್ಷವನ್ನು ಉಲ್ಲೇಖಿಸಲಾಗಿದೆ. (594 - 593 ಕ್ರಿ. ಪೂ.)

ಹೆಗಲನ್ನು ಕೊಡುವ ಮತ್ತು ಅವನ ಆಜ್ಞೆಯನ್ನು
ಪಾಲಿಸುವ ಜನಾಂಗಗಳು ಬದುಕುವವು. ಆ ಜನಾಂಗ
ಗಳವರು ತಮ್ಮ ದೇಶದಲ್ಲಿಯೇ ಇದ್ದುಕೊಂಡು ಬಾಬಿ
ಲೋನಿನ ರಾಜನ ಸೇವೆಮಾಡುವ ಅವಕಾಶವನ್ನು ಮಾಡಿ
ಕೊಡುತ್ತೇನೆ. ಆ ಜನಾಂಗಗಳ ಜನರು ತಮ್ಮ ದೇಶದ
ಲ್ಲಿಯೇ ವ್ಯವಸಾಯ ಮಾಡಿಕೊಂಡಿರುವರು.''' ಇದು
ಯೆಹೋವನ ನುಡಿ.

12'''ನಾನು ಯೆಹೂದದ ರಾಜನಾದ ಚಿದ್ಕೀಯನಿಗೂ
ಇದೇ ಸಂದೇಶವನ್ನು ಕೊಟ್ಟಿದ್ದೇನೆ. ''ಚಿದ್ಕೀಯನೇ,
ನೀನು ನಿನ್ನ ಹೆಗಲನ್ನು ಬಾಬಿಲೋನಿನ ರಾಜನ ನೊಗಕ್ಕೆ
ಕೊಡಬೇಕು; ಅವನ ಆಜ್ಞಾಪಾಲನೆ ಮಾಡಬೇಕು. ಬಾಬಿ
ಲೋನಿನ ರಾಜನ ಮತ್ತು ಅಲ್ಲಿಯ ಜನರ ಸೇವೆಮಾಡಿ
ಕೊಂಡಿದ್ದರೆ ನೀನು ಬದುಕುವೆ. 13ಬಾಬಿಲೋನಿನ
ರಾಜನ ಸೇವೆಮಾಡಲು ಒಪ್ಪದಿದ್ದರೆ ನೀನು ಮತ್ತು ನಿನ್ನ
ಜನರು ವೈರಿಗಳ ಖಡ್ಗದಿಂದಲೂ, ಹಸಿವೆಯಿಂದಲೂ,
ಭಯಂಕರವಾದ ವ್ಯಾಧಿಗಳಿಂದಲೂ ಸಾಯುವಿರಿ. ಇದು
ನೆರವೇರುತ್ತದೆಯೆಂದು ಯೆಹೋವನು ಹೇಳಿದ್ದಾನೆ.
14ಆದರೆ ನೀವೆಂದಿಗೂ ಬಾಬಿಲೋನ್ ರಾಜನಿಗೆ
ಗುಲಾಮರಾಗುವದಿಲ್ಲ ಎಂದು ಈ ಸುಳ್ಳು ಪ್ರವಾದಿಗಳು
ಹೇಳುತ್ತಿದ್ದಾರೆ.

'''ಆ ಪ್ರವಾದಿಗಳ ಮಾತುಗಳನ್ನು ಕಿವಿಗೆ ಹಾಕಿಕೊಳ್ಳ
ಬೇಡಿ ಅವರು ನಿಮಗೆ ಸುಳ್ಳುಪ್ರವಾದನೆ ಮಾಡುತ್ತಿದ್ದಾರೆ.
15ನಾನು ಆ ಪ್ರವಾದಿಗಳನ್ನು ಕಳುಹಿಸಿಲ್ಲ. ಅವರು ಸುಳ್ಳು
ಪ್ರವಾದನೆಗಳನ್ನು ಮಾಡುತ್ತಿದ್ದಾರೆ ಮತ್ತು ಅದು ನನ್ನ
ಸಂದೇಶವೆಂದು ಹೇಳುತ್ತಲಿದ್ದಾರೆ. ನಾನು ಯೆಹೂದದ
ಜನರಾದ ನಿಮ್ಮನ್ನು ದೂರ ಕಳುಹಿಸುತ್ತೇನೆ. ನೀವು
ಸಾಯುವಿರಿ. ನಿಮಗೆ ಪ್ರವಾದನೆಯನ್ನು ಮಾಡುತ್ತಿರುವ
ಆ ಪ್ರವಾದಿಗಳು ಸಹ ಸಾಯುತ್ತಾರೆ''' ಇದು
ಯೆಹೋವನ ನುಡಿ.

16ಆಗ ನಾನು (ಯೆರೆಮೀಯನು) ಯಾಜಕರಿಗೂ ಆ
ಸಮಸ್ತ ಜನರಿಗೂ ಹೀಗೆ ಹೇಳಿದೆ: ''ಯೆಹೋವನು
ಹೇಳುತ್ತಾನೆ. ಆ ಸುಳ್ಳು ಪ್ರವಾದಿಗಳು 'ಬಾಬಿಲೋನಿನ
ವರು ಯೆಹೋವನ ಆಲಯದಿಂದ ಅನೇಕ ವಸ್ತುಗಳನ್ನು
ತೆಗೆದುಕೊಂಡು ಹೋಗಿದ್ದಾರೆ. ಆ ವಸ್ತುಗಳನ್ನು ಬೇಗನೆ
ಹಿಂದಕ್ಕೆ ತರಲಾಗುವುದು' ಎಂದು ಹೇಳುತ್ತಿದ್ದಾರೆ. ಆ
ಪ್ರವಾದಿಗಳ ಮಾತುಗಳಿಗೆ ಕಿವಿಗೊಡಬೇಡಿ. ಏಕೆಂದರೆ
ಅವರು ನಿಮಗೆ ಸುಳ್ಳುಪ್ರವಾದನೆ ಮಾಡುತ್ತಿದ್ದಾರೆ. 17ಆ
ಪ್ರವಾದಿಗಳ ಮಾತನ್ನು ಕೇಳಬೇಡಿ. ಬಾಬಿಲೋನಿನ
ರಾಜನ ಸೇವೆಮಾಡಿರಿ. ದಂಡನೆಗಳನ್ನು ಸ್ವೀಕರಿಸಿರಿ, ಆಗ
ನೀವು ಬದುಕುವಿರಿ. ನಿಷ್ಕಾರಣವಾಗಿ ಈ ಜೆರುಸಲೇಮ್
ನಗರವು ಹಾಳಾಗಬಾರದು. 18ಆ ಜನರು ಯೆಹೋವನ
ಸಂದೇಶವನ್ನು ತಂದ ಪ್ರವಾದಿಗಳಾಗಿದ್ದರೆ ಅವರು
ಪ್ರಾರ್ಥನೆ ಸಲ್ಲಿಸಲಿ. ಇನ್ನೂ ಯೆಹೋವನ ಆಲಯದಲ್ಲಿ
ರುವ ವಸ್ತುಗಳ ಬಗ್ಗೆ ಅವರು ಪ್ರಾರ್ಥನೆ ಸಲ್ಲಿಸಲಿ. ಇನ್ನೂ
ರಾಜನ ಅರಮನೆಯಲ್ಲಿರುವ ವಸ್ತುಗಳ ಬಗ್ಗೆ ಅವರು
ಪ್ರಾರ್ಥನೆ ಸಲ್ಲಿಸಲಿ. ಇನ್ನೂ ಜೆರುಸಲೇಮಿನಲ್ಲಿರುವ
ಪದಾರ್ಥಗಳ ಬಗ್ಗೆ ಅವರು ಪ್ರಾರ್ಥನೆ ಸಲ್ಲಿಸಲಿ. ಆ
ವಸ್ತುಗಳನ್ನೆಲ್ಲ ಬಾಬಿಲೋನಿಗೆ ತೆಗೆದುಕೊಂಡು ಹೋಗ
ಬಾರದೆಂದು ಅವರು ಪ್ರಾರ್ಥನೆ ಸಲ್ಲಿಸಲಿ.''

19ಸರ್ವಶಕ್ತನಾದ ಯೆಹೋವನು ಜೆರುಸಲೇಮಿನಲ್ಲಿ
ಇನ್ನೂ ಉಳಿದ ವಸ್ತುಗಳ ಬಗ್ಗೆ ಹೀಗೆ ಹೇಳುತ್ತಾನೆ.
ಯೆಹೋವನ ಆಲಯದಲ್ಲಿ ಕಂಬಗಳಿವೆ, ಕಂಚಿನ ಸಾಗರ
ವಿದೆ, ಪೀಠಗಳಿವೆ ಮತ್ತು ಇತರ ವಸ್ತುಗಳಿವೆ. ಬಾಬಿಲೋ
ನಿನ ರಾಜನಾದ ನೆಬೂಕದ್ನೆಚ್ಚರನು ಆ ವಸ್ತುಗಳನ್ನು
ಜೆರುಸಲೇಮಿನಲ್ಲಿಯೇ ಬಿಟ್ಟುಹೋದನು. 20ನೆಬೂಕ
ದ್ನೆಚ್ಚರನು ಯೆಹೂದದ ರಾಜನಾದ ಯೆಹೋಯಾಕೀ
ನನನ್ನು ಸೆರೆಯಾಳಾಗಿ ತೆಗೆದುಕೊಂಡು ಹೋಗುವಾಗ ಆ
ವಸ್ತುಗಳನ್ನು ತೆಗೆದುಕೊಂಡು ಹೋಗಲಿಲ್ಲ. ಯೆಹೋ
ಯಾಕೀನನು ಯೆಹೋಯಾಕೀಮನ ಮಗನಾಗಿದ್ದನು.
ನೆಬೂಕದ್ನೆಚ್ಚರನು ಯೆಹೂದ ಮತ್ತು ಜೆರುಸಲೇಮಿ
ನಿಂದ ಬೇರೆ ಪ್ರಮುಖ ಜನರನ್ನು ಸಹ ತೆಗೆದುಕೊಂಡು
ಹೋದನು. 21ಸರ್ವಶಕ್ತನೂ ಇಸ್ರೇಲರ ದೇವರೂ,
ಆಗಿರುವ ಯೆಹೋವನ ಆಲಯದಲ್ಲಿ ಇನ್ನೂ ಉಳಿದ
ವಸ್ತುಗಳ ಬಗ್ಗೆಯೂ ರಾಜನ ಅರಮನೆಯಲ್ಲಿ ಮತ್ತು
ಜೆರುಸಲೇಮಿನಲ್ಲಿ ಇನ್ನೂ ಉಳಿದಿರುವ ವಸ್ತುಗಳ
ಬಗ್ಗೆಯೂ ಹೀಗೆನ್ನುತ್ತಾನೆ. ''ಆ ವಸ್ತುಗಳನ್ನು ಬಾಬಿಲೋ
ನಿಗೆ ತೆಗೆದುಕೊಂಡು ಹೋಗಲಾಗುವುದು. 22ಆ
ವಸ್ತುಗಳು ಬಾಬಿಲೋನಿಗೆ ಒಯ್ಯಲ್ಪಟ್ಟು ನಾನು ಅವು
ಗಳನ್ನು ಅಲ್ಲಿಂದ ತರುವ ದಿವಸಗಳವರೆಗೆ ಅಲ್ಲಿಯೇ
ಇರುವವು. ಆಮೇಲೆ ನಾನು ಆ ವಸ್ತುಗಳನ್ನು ತರುವೆನು.
ನಾನು ಆ ವಸ್ತುಗಳನ್ನು ಮತ್ತೆ ಈ ಸ್ಥಳದಲ್ಲಿ ಇಡುವೆನು.''
ಇದು ಯೆಹೋವನ ನುಡಿ.

## ಸುಳ್ಳುಪ್ರವಾದಿಯಾದ ಹನನ್ಯನು

28 ಯೆಹೂದದಲ್ಲಿ ಚಿದ್ಕೀಯನ ಆಳ್ವಿಕೆಯ
ನಾಲ್ಕನೇ ವರ್ಷದ ಐದನೇ ತಿಂಗಳಲ್ಲಿ ಹನನ್ಯ
ನೆಂಬ ಪ್ರವಾದಿಯು ನನ್ನೊಂದಿಗೆ ಮಾತನಾಡಿದನು.
ಹನನ್ಯನು ಅಜ್ಜೂರನ ಮಗ, ಹನನ್ಯನು ಗಿಬ್ಯೋನ್
ಊರಿನವನು. ನನ್ನೊಂದಿಗೆ ಮಾತನಾಡಿದಾಗ ಅವನು
ಯೆಹೋವನ ಆಲಯದಲ್ಲಿದ್ದನು. ಯಾಜಕರು ಮತ್ತು
ಸಮಸ್ತ ಜನರು ಅಲ್ಲಿದ್ದರು. ಹನನ್ಯನು ಹೀಗೆ ಹೇಳಿದನು:
2''ಸರ್ವಶಕ್ತನೂ ಇಸ್ರೇಲರ ದೇವರೂ ಆಗಿರುವ
ಯೆಹೋವನು ಹೇಳುವನು: 'ಯೆಹೂದ್ಯರ ಮೇಲೆ
ಬಾಬಿಲೋನಿನ ರಾಜನು ಹೊರಿಸಿದ ನೊಗವನ್ನು ನಾನು

ಮುರಿದುಹಾಕುವೆನು. 3ಎರಡು ವರ್ಷಗಳೊಳಗಾಗಿ,
ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನು
ಯೆಹೋವನ ಆಲಯದಿಂದ ತೆಗೆದುಕೊಂಡು ಹೋದ
ಎಲ್ಲಾ ವಸ್ತುಗಳನ್ನು ಹಿಂದಕ್ಕೆ ತರುವೆನು. ನೆಬೂಕದ್ನೆಚ್ಚ
ರನು ಆ ವಸ್ತುಗಳನ್ನು ಬಾಬಿಲೋನಿಗೆ ತೆಗೆದುಕೊಂಡು
ಹೋಗಿದ್ದಾನೆ. ಆದರೆ ನಾನು ಆ ವಸ್ತುಗಳನ್ನು ಜೆರುಸಲೇ
ಮಿಗೆ ತರುತ್ತೇನೆ. 4ನಾನು ಯೆಹೂದದ ರಾಜನಾದ
ಯೆಹೋಯಾಕೀನನನ್ನು ಇಲ್ಲಿಗೆ ಕರೆದುಕೊಂಡು
ಬರುತ್ತೇನೆ. ಯೆಹೋಯಾಕೀನನು ಯೆಹೋಯಾಕೀ
ಮನ ಮಗನು. ನೆಬೂಕದ್ನೆಚ್ಚರನು ಬಾಬಿಲೋನಿಗೆ
ತೆಗೆದುಕೊಂಡು ಹೋದ ಎಲ್ಲಾ ಯೆಹೂದ್ಯರನ್ನು ನಾನು
ಮತ್ತೆ ಕರೆದುಕೊಂಡು ಬರುತ್ತೇನೆ. ಬಾಬಿಲೋನಿನ
ರಾಜನು ಯೆಹೂದದ ಜನರ ಮೇಲೆ ಹೇರಿದ ನೊಗವನ್ನು
ನಾನು ಮುರಿದು ಹಾಕುತ್ತೇನೆ.''' ಇದು ಯೆಹೋವನ
ಸಂದೇಶ.

5ಪ್ರವಾದಿಯಾದ ಯೆರೆಮೀಯನು ಪ್ರವಾದಿಯಾದ
ಹನನ್ಯನಿಗೆ ಹೀಗೆ ಉತ್ತರಕೊಟ್ಟನು. ಅವರು ಯೆಹೋ
ವನ ಆಲಯದಲ್ಲಿ ನಿಂತಿದ್ದರು. ಯಾಜಕರೂ ಮತ್ತು
ಅಲ್ಲಿಯ ಸಮಸ್ತ ಜನರು ಯೆರೆಮೀಯನ ಉತ್ತರವನ್ನು
ಕೇಳಿಸಿಕೊಂಡರು. 6ಯೆರೆಮೀಯನು ಹನನ್ಯನಿಗೆ
''ಹಾಗೆಯೇ ಆಗಲಿ, ನೀನು ಹೇಳಿದಂತೆ ಯೆಹೋವನು
ಮಾಡಲಿ. ನೀನು ಪ್ರವಾದಿಸಿದ ಸಂದೇಶವನ್ನು ಯೆಹೋ
ವನು ನಿಜವಾಗುವಂತೆ ಮಾಡುವನೆಂದು ನಾನು ಆಶಿಸು
ತ್ತೇನೆ. ಯೆಹೋವನು ಬಾಬಿಲೋನಿನಿಂದ ತನ್ನ ಆಲ
ಯದ ವಸ್ತುಗಳನ್ನು ಇಲ್ಲಿಗೆ ತರುವನೆಂದು ನಾನು ಆಶಿ
ಸುವೆ. ತಮ್ಮ ಮನೆಗಳನ್ನು ಬಿಟ್ಟುಹೋಗಲು ಒತ್ತಾಯಿಸ
ಲ್ಪಟ್ಟ ಜನರನ್ನು ಮತ್ತೆ ಯೆಹೋವನು ಇಲ್ಲಿಗೆ ಕರೆ
ತರುವನೆಂದು ನಾನು ಆಶಿಸುವೆ.

7''ಹನನ್ಯನೇ, ನಾನು ಹೇಳಬೇಕಾದುದನ್ನು ಕೇಳು.
ಸಮಸ್ತ ಜನರಿಗೆ ನಾನು ಹೇಳಬೇಕಾದುದನ್ನು ಕೇಳು.
8ಹನನ್ಯನೇ, ನಾನು ಮತ್ತು ನೀನು ಪ್ರವಾದಿಗಳಾಗುವದ
ಕ್ಕಿಂತ ಬಹಳ ಮುಂಚೆ ಪ್ರವಾದಿಗಳು ಇದ್ದರು. ಯುದ್ಧ,
ಹಸಿವು, ಮತ್ತು ಭಯಂಕರವಾದ ವ್ಯಾಧಿಗಳು ಅನೇಕ
ದೇಶಗಳಿಗೆ ಮತ್ತು ದೊಡ್ಡ ದೊಡ್ಡ ರಾಜ್ಯಗಳಿಗೆ ಬರುತ್ತವೆ
ಎಂದು ಅವರು ಪ್ರವಾದಿಸಿದ್ದಾರೆ.

9ಆದರೆ ನಾವು ನೆಮ್ಮದಿಯಿಂದ ಇರುವೆವು
ಎಂದು ಪ್ರವಾದಿಸುವ ಪ್ರವಾದಿಯು ನಿಜವಾಗಿಯೂ
ಯೆಹೋವನಿಂದ ಕಳುಹಿಸಲ್ಪಟ್ಟಿರುವನೇ ಎಂಬುದನ್ನು
ನಾವು ಪರೀಕ್ಷಿಸಬೇಕು. ಆ ಪ್ರವಾದಿಯ ಸಂದೇಶವು
ಸತ್ಯವಾಗಿ ಪರಿಣಮಿಸಿದರೆ ಅವನು ನಿಜವಾಗಿ ಯೆಹೋವ
ನಿಂದ ಕಳುಹಿಸಲ್ಪಟ್ಟವನೆಂದು ಜನರು ತಿಳಿದು
ಕೊಳ್ಳಬಹುದು.''

10ಯೆರೆಮೀಯನು ತನ್ನ ಹೆಗಲಿನ ಮೇಲೆ ನೊಗವನ್ನು
ಹೊತ್ತುಕೊಂಡಿದ್ದನು. ಪ್ರವಾದಿಯಾದ ಹನನ್ಯನು ಯೆರೆ
ಮೀಯನ ಹೆಗಲಿನಿಂದ ಆ ನೊಗವನ್ನು ತೆಗೆದುಕೊಂಡು
ಆ ನೊಗವನ್ನು ಮುರಿದುಹಾಕಿದನು. 11ಆಮೇಲೆ ಹನ
ನ್ಯನು ಗಟ್ಟಿಯಾಗಿ ಎಲ್ಲರೂ ಕೇಳುವಂತೆ ಮಾತನಾಡಿ
ದನು. ''ಯೆಹೋವನು ಹೇಳುತ್ತಾನೆ: 'ಇದೇ ರೀತಿಯಲ್ಲಿ
ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನು ಹೇರಿದ
ನೊಗವನ್ನು ನಾನು ಮುರಿದುಹಾಕುವೆನು. ಅವನು ಆ
ನೊಗವನ್ನು ಜಗತ್ತಿನ ಸಮಸ್ತ ಜನಾಂಗಗಳ ಮೇಲೆ
ಹೇರಿದ್ದಾನೆ. ಆದರೆ ನಾನು ಆ ನೊಗವನ್ನು ಎರಡು ವರ್ಷ
ದೊಳಗಾಗಿ ಮುರಿದುಹಾಕುವೆನು.'' ಹನನ್ಯನು ಹಾಗೆ
ಹೇಳಿದ ಮೇಲೆ ಯೆರೆಮೀಯನು ಪವಿತ್ರಾಲಯವನ್ನು
ಬಿಟ್ಟನು.

12ಆಗ ಯೆರೆಮೀಯನಿಗೆ ಯೆಹೋವನ ಸಂದೇಶ
ಬಂದಿತು. ಹನನ್ಯನು ಯೆರೆಮೀಯನ ಕತ್ತಿನಿಂದ ನೊಗ
ವನ್ನು ತೆಗೆದುಕೊಂಡು ಮುರಿದುಹಾಕಿದ ಮೇಲೆ ಈ
ಸಂದೇಶ ಬಂದಿತು.

13ಯೆಹೋವನು ಯೆರೆಮೀಯನಿಗೆ ಇಂತೆಂದನು:
''ಹೋಗಿ ಹನನ್ಯನಿಗೆ' ಹೀಗೆ ಹೇಳು. ಯೆಹೋವನು
ಹೀಗೆನ್ನುತ್ತಾನೆ. ನೀನು ಮರದ ನೊಗವನ್ನು ಮುರಿದೆ,
ಆದರೆ ನಾನು ಮರದ ನೊಗಕ್ಕೆ ಬದಲಾಗಿ ಕಬ್ಬಿಣದ
ನೊಗವನ್ನು ಮಾಡುವೆನು.' 14ಇಸ್ರೇಲಿನ ದೇವರೂ
ಸರ್ವಶಕ್ತನೂ ಆಗಿರುವ ಯೆಹೋವನು ಹೇಳುವದೇ
ನೆಂದರೆ, 'ನಾನು ಕಬ್ಬಿಣದ ನೊಗವನ್ನು ಈ ಎಲ್ಲಾ
ಜನಾಂಗಗಳ ಹೆಗಲಿನ ಮೇಲೆ ಹೊರಿಸುವೆನು.
ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನ ಸೇವೆ
ಯನ್ನು ಮಾಡುವಂತೆ ಮಾಡುತ್ತೇನೆ. ಅವರು ಅವನಿಗೆ
ಗುಲಾಮರಾಗಿರುವರು. ನಾನು ನೆಬೂಕದ್ನೆಚ್ಚರನಿಗೆ
ಕಾಡುಪ್ರಾಣಿಗಳ ಮೇಲೂ ಅಧಿಕಾರವನ್ನು ದಯ
ಪಾಲಿಸುವೆನು.'''

15ತರುವಾಯ ಪ್ರವಾದಿಯಾದ ಯೆರೆಮೀಯನು
ಪ್ರವಾದಿಯಾದ ಹನನ್ಯನಿಗೆ ಹೀಗೆ ಹೇಳಿದನು.
''ಹನನ್ಯನೇ, ಕೇಳು. ಯೆಹೋವನು ನಿನ್ನನ್ನು ಕಳುಹಿಸ
ಲಿಲ್ಲ. ಆದರೆ ಯೆಹೂದದ ಜನರಿಗೆ ಸುಳ್ಳನ್ನು ನಂಬುವಂತೆ
ನೀನು ಮಾಡಿರುವೆ.

16ಅದಕ್ಕಾಗಿ ಯೆಹೋವನು ಹೀಗೆ ಹೇಳುತ್ತಾನೆ:
'ಹನನ್ಯನೇ, ನಾನು ನಿನ್ನನ್ನು ಶೀಘ್ರದಲ್ಲಿ ಈ ಜಗತ್ತಿನಿಂದ
ತೆಗೆದುಬಿಡುತ್ತೇನೆ. ನೀನು ಈ ವರ್ಷ ಮರಣಹೊಂದುವೆ.
ಏಕೆಂದರೆ ನೀನು ಜನರನ್ನು ಯೆಹೋವನ ವಿರುದ್ಧ
ತಿರುಗುವಂತೆ ಮಾಡಿದೆ.'''

17ಹನನ್ಯನು ಅದೇ ವರ್ಷದ ಏಳನೆಯ ತಿಂಗಳಲ್ಲಿ
ಮರಣಹೊಂದಿದನು.

## ಬಾಬಿಲೋನಿನಲ್ಲಿದ್ದ ಯೆಹೂದದ ಸೆರೆಯಾಳುಗಳಿಗೆ ಒಂದು ಪತ್ರ

29 ಯೆರೆಮೀಯನು ಬಾಬಿಲೋನಿನಲ್ಲಿದ್ದ
ಯೆಹೂದ್ಯ ಸೆರೆಯಾಳುಗಳಿಗೆ ಅಂದರೆ ಹಿರಿಯ
ರಿಗೆ (ನಾಯಕರಿಗೆ), ಯಾಜಕರಿಗೆ, ಪ್ರವಾದಿಗಳಿಗೆ ಮತ್ತು
ಇನ್ನುಳಿದ ಸಮಸ್ತ ಜನರಿಗೆ ಪತ್ರವನ್ನು ಕಳುಹಿಸಿದನು.
ಇವರನ್ನು ನೆಬೂಕದ್ನೆಚ್ಚರನು ಜೆರುಸಲೇಮಿನಿಂದ
ಬಾಬಿಲೋನಿಗೆ ಸೆರೆಯಾಳುಗಳಾಗಿ ಕೊಂಡೊಯ್ದನು.
2(ರಾಜನಾದ ಯೆಹೋಯಾಕೀನನನ್ನು, ರಾಜಮಾತೆ
ಯನ್ನು, ಯೆಹೂದದ ಮತ್ತು ಜೆರುಸಲೇಮಿನ ಅಧಿಕಾರಿ
ಗಳನ್ನು, ಮುಂದಾಳುಗಳನ್ನು, ಬಡಗಿಗಳನ್ನು ಮತ್ತು
ಕಮ್ಮಾರರನ್ನು ಜೆರುಸಲೇಮಿನಿಂದ ತೆಗೆದುಕೊಂಡು
ಹೋದ ಮೇಲೆ ಈ ಪತ್ರವನ್ನು ಕಳಿಸಲಾಯಿತು.)
3ಚಿದ್ಕೀಯನು ಎಲ್ಲಾಸ ಮತ್ತು ಗೆಮರ್ಯರನ್ನು ರಾಜ
ನಾದ ನೆಬೂಕದ್ನೆಚ್ಚರನ ಬಳಿಗೆ ಕಳಿಸಿದನು. ಚಿದ್ಕೀಯನು
ಯೆಹೂದದ ರಾಜನಾಗಿದ್ದನು. ಎಲ್ಲಾಸನು ಶಾಫಾನನ
ಮಗನಾಗಿದ್ದನು. ಗೆಮರ್ಯನು ಹಿಲ್ಕೀಯನ ಮಗನಾಗಿ
ದ್ದನು. ಅವರನ್ನು ಬಾಬಿಲೋನಿಗೆ ಕೊಂಡೊಯ್ಯಲು
ಯೆರೆಮೀಯನು ಪತ್ರವನ್ನು ಕೊಟ್ಟನು. ಆ ಪತ್ರದಲ್ಲಿ
ಹೀಗೆ ಬರೆಯಲಾಗಿತ್ತು:
4ಇಸ್ರೇಲರ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ತಾನು ಜೆರುಸಲೇಮಿನಿಂದ ಬಾಬಿಲೋ
ನಿಗೆ ಬಂಧಿಗಳನ್ನಾಗಿ ಕಳುಹಿಸಿದ ಎಲ್ಲಾ ಜನರಿಗೆ ಈ
ಮಾತುಗಳನ್ನು ಹೇಳುತ್ತಾನೆ. 5‘‘ಮನೆಗಳನ್ನು ಕಟ್ಟಿ ಅವು
ಗಳಲ್ಲಿ ವಾಸಿಸಿರಿ. ಆ ಪ್ರದೇಶದಲ್ಲಿ ನೆಲೆಸಿರಿ. ತೋಟಗ
ಳನ್ನು ಬೆಳೆಸಿರಿ ಮತ್ತು ನೀವು ಬೆಳೆಸಿದ ಆಹಾರವನ್ನು
ಸೇವಿಸಿರಿ. 6ಮದುವೆ ಮಾಡಿಕೊಳ್ಳಿರಿ; ಗಂಡು ಮತ್ತು
ಹೆಣ್ಣು ಮಕ್ಕಳನ್ನು ಪಡೆಯಿರಿ. ನಿಮ್ಮ ಗಂಡುಮಕ್ಕಳಿಗೂ
ನಿಮ್ಮ ಹೆಣ್ಣುಮಕ್ಕಳಿಗೂ ಮದುವೆ ಮಾಡಿರಿ. ಅವರಿಗೂ
ಗಂಡು ಮತ್ತು ಹೆಣ್ಣುಮಕ್ಕಳಾಗಲಿ. ಅನೇಕ ಮಕ್ಕಳನ್ನು
ಹೆತ್ತು ಬಾಬಿಲೋನಿನಲ್ಲಿ ಬಹು ಸಂಖ್ಯಾತರಾಗಿ. ಅಲ್ಪ
ಸಂಖ್ಯಾತರಾಗಬೇಡಿ. 7ಅಂತೆಯೇ ನಾನು ನಿಮ್ಮನ್ನು
ಕಳುಹಿಸಿದ ನಗರಕ್ಕೆ ಒಳ್ಳೆಯದನ್ನು ಮಾಡಿರಿ. ನೀವು
ವಾಸಮಾಡುತ್ತಿರುವ ನಗರಕ್ಕಾಗಿ ಯೆಹೋವನಿಗೆ
ಪ್ರಾರ್ಥಿಸಿರಿ. ಏಕೆಂದರೆ ಆ ನಗರದಲ್ಲಿ ನೆಮ್ಮದಿಯಿದ್ದರೆ
ನಿಮಗೂ ನೆಮ್ಮದಿ ಸಿಗುವುದು.’’ 8ಇಸ್ರೇಲಿಯರ
ದೇವರೂ, ಸರ್ವಶಕ್ತನೂ ಆಗಿರುವ ಯೆಹೋವನು,
ಇಂತೆನ್ನುತ್ತಾನೆ: ‘‘ನಿಮ್ಮ ಪ್ರವಾದಿಗಳು ಮತ್ತು ಮಾಟ
ಮಂತ್ರಗಾರರು ನಿಮ್ಮನ್ನು ಮರುಳುಗೊಳಿಸದಿರಲಿ.
ಅವರು ನೋಡುವ ಕನಸುಗಳಿಗೆ ಕಿವಿಗೊಡಬೇಡಿ.
9ಅವರು ಸುಳ್ಳುಗಳನ್ನು ಬೋಧಿಸುತ್ತಿರುವರು. ಅವರ
ಸಂದೇಶವು ನನ್ನಿಂದ ಬಂದುದು ಎಂದು ಅವರು ಹೇಳು
ತ್ತಿರುವರು. ಆದರೆ ನಾನು ಅದನ್ನು ಕಳುಹಿಸಲಿಲ್ಲ.’’ ಈ
ಸಂದೇಶವು ಯೆಹೋವನಿಂದ ಬಂದದ್ದು.

10ಯೆಹೋವನು ಇಂತೆನ್ನುತ್ತಾನೆ: ‘‘ಬಾಬಿ
ಲೋನ್ ಎಪ್ಪತ್ತು ವರ್ಷಗಳವರೆಗೆ ಬಲಿಷ್ಠ
ವಾಗಿರುವುದು. ಅನಂತರ ನಾನು ಬಾಬಿಲೋನಿ
ನಲ್ಲಿ ವಾಸಮಾಡುತ್ತಿರುವ ನಿಮ್ಮ ಬಳಿಗೆ ಬಂದು
ನನ್ನ ವಾಗ್ದಾನದಂತೆ ನಿಮ್ಮನ್ನು ಜೆರುಸಲೇಮಿಗೆ
ಮತ್ತೆ ಕರೆದುಕೊಂಡು ಬರುವೆನು. 11ನಾನು ನಿಮ
ಗಾಗಿ ಹಾಕಿದ ಯೋಜನೆಗಳು ನನಗೆ ಗೊತ್ತಿರುವು
ದರಿಂದ ನಾನು ಹೀಗೆ ಹೇಳುತ್ತಿದ್ದೇನೆ.’’ ಇದು
ಯೆಹೋವನ ಸಂದೇಶ. ‘‘ನಾನು ನಿಮಗಾಗಿ
ಒಳ್ಳೆಯ ಯೋಜನೆಗಳನ್ನು ಹಾಕಿದ್ದೇನೆ. ನಿಮಗೆ
ಅಹಿತವನ್ನು ಉಂಟುಮಾಡುವ ವಿಚಾರ ನನಗಿಲ್ಲ.
ನಾನು ನಿಮಗಾಗಿ ಆಶಾದಾಯಕವಾದ ಮತ್ತು
ಒಳ್ಳೆಯ ಭವಿಷ್ಯದ ವಿಚಾರಗಳನ್ನಿಟ್ಟುಕೊಂಡಿ
ದ್ದೇನೆ. 12ಆಗ ನೀವು ನನ್ನಲ್ಲಿ ಮೊರೆಯಿಡುವಿರಿ.
ನೀವು ನನ್ನಲ್ಲಿಗೆ ಬಂದು ನನ್ನನ್ನು ಪ್ರಾರ್ಥಿಸಿರಿ; ಆಗ
ನಾನು ನಿಮಗೆ ಕಿವಿಗೊಡುವೆನು. 13ನೀವು ನನ್ನನ್ನು
ಹುಡುಕುವಿರಿ. ನೀವು ಮನಃಪೂರ್ವಕವಾಗಿ
ಹುಡುಕಿದಾಗ ನನ್ನನ್ನು ಕಂಡುಕೊಳ್ಳುವಿರಿ.
14ನಾನು ನಿಮಗೆ ದೊರೆಯುವೆನು. ಇದು
ಯೆಹೋವನ ನುಡಿ. ‘‘ನಾನು ನಿಮ್ಮನ್ನು ನಿಮ್ಮ
ಬಂಧನದಿಂದ ಬಿಡಿಸಿ ಕರೆದುತರುವೆನು. ನಾನು ಈ
ಸ್ಥಳವನ್ನು ಬಿಡಲು ನಿಮಗೆ ಒತ್ತಾಯಿಸಿದೆ. ಆದರೆ
ನಾನು ನಿಮ್ಮನ್ನು ಕಳುಹಿಸಿದ್ದ ಎಲ್ಲಾ ಜನಾಂಗಗ
ಳಿಂದ ಮತ್ತು ಎಲ್ಲಾ ಸ್ಥಳಗಳಿಂದ ನಿಮ್ಮನ್ನು ಒಟ್ಟು
ಗೂಡಿಸಿ ಈ ಸ್ಥಳಕ್ಕೆ ಕರೆದು ತರುವೆನು.’’ ಇದು
ಯೆಹೋವನ ನುಡಿ.

15‘‘ಆದರೆ ಯೆಹೋವನು ನಮಗೆ ಬಾಬಿಲೋನಿ
ನಲ್ಲಿಯೇ ಪ್ರವಾದಿಗಳನ್ನು ಕೊಟ್ಟಿದ್ದಾನೆ’’ ಎಂದು ನೀವು
ಹೇಳಬಹುದು. 16ಬಾಬಿಲೋನಿಗೆ ತೆಗೆದುಕೊಂಡು
ಹೋಗದ ನಿಮ್ಮ ಆಪ್ತರ ಬಗ್ಗೆ ಯೆಹೋವನು
ಇಂತೆನ್ನುತ್ತಾನೆ. ಈಗ ದಾವೀದನ ಸಿಂಹಾಸನಾರೂಢ
ನಾದ ರಾಜನ ವಿಷಯವಾಗಿಯೂ ಇನ್ನೂ ಜೆರುಸಲೇಮ್
ನಗರದಲ್ಲಿಯೇ ಇರುವ ಜನರ ವಿಷಯವಾಗಿಯೂ
ಹೇಳುತ್ತಿರುವೆನು. 17ಸರ್ವಶಕ್ತನಾದ ಯೆಹೋವನು
ಹೇಳಿದನು: ‘‘ಇನ್ನು ಜೆರುಸಲೇಮಿನಲ್ಲಿಯೇ ಇದ್ದ ಜನರ
ವಿರುದ್ಧ ನಾನು ಬೇಗನೆ ಖಡ್ಗವನ್ನು, ಹಸಿವನ್ನು ಮತ್ತು
ಭಯಂಕರವಾದ ವ್ಯಾಧಿಯನ್ನು ಕಳುಹಿಸುವೆನು. ನಾನು
ಅವರನ್ನು, ಅತೀ ಕೊಳೆತು ತಿನ್ನಲಾಗದ ಅಂಜೂರದ

ಹಣ್ಣುಗಳಂತೆ ಮಾಡುವೆನು. [18]ಇನ್ನೂ ಜೆರುಸಲೇಮಿ
ನಲ್ಲಿರುವ ಜನರಿಗೆ ಖಡ್ಗ, ಹಸಿವು ಮತ್ತು ಭಯಂಕರವಾದ
ವ್ಯಾಧಿಗಳಿಂದೊಡಗೂಡಿ ಬೆನ್ನಟ್ಟುವೆನು. ಆ ಜನರ
ದುರ್ಗತಿಯನ್ನು ನೋಡಿ ಭೂಲೋಕದ ಸಮಸ್ತ ರಾಜ್ಯ
ಗಳಿಗೆ ಭಯ ಉಂಟಾಗುವಂತೆ ಮಾಡುವೆನು. ಆ ಜನ
ರನ್ನು ನಾಶಮಾಡುವೆನು. ನಡೆದ ವಿಷಯಗಳ ಬಗ್ಗೆ ಕೇಳಿ
ಜನರು ಬೆರಗಾಗಿ ಸಿಳ್ಳುಹಾಕುವರು. ಯಾರಿಗಾದರೂ
ಕೇಡಾಗಲಿ ಎಂದು ಹೇಳಬೇಕಾದರೆ ಜನರು ಅವರ
ಉದಾಹರಣೆಯನ್ನು ಕೊಡುವರು. ನಾನು ಅವರನ್ನು
ಅಟ್ಟಿದ ಎಲ್ಲೆಡೆಯಲ್ಲಿಯೂ ಜನರು ಅವರನ್ನು ಅವಮಾನ
ಗೊಳಿಸುವರು. [19]ಜೆರುಸಲೇಮಿನವರು ನನ್ನ ಸಂದೇಶಕ್ಕೆ
ಕಿವಿಗೊಟ್ಟಿಲ್ಲವಾದ ಕಾರಣ ನಾನು ಹಾಗೆಲ್ಲ ನಡೆಯು
ವಂತೆ ಮಾಡುವೆನು'' ಇದು ಯೆಹೋವನ ನುಡಿ. ''ನಾನು
ಮತ್ತೆ ಮತ್ತೆ ನನ್ನ ಸಂದೇಶವನ್ನು ಅವರಿಗೆ ಕೊಟ್ಟೆ. ಆ
ಜನರಿಗೆ ಸಂದೇಶಗಳನ್ನು ಕೊಡುವದಕ್ಕಾಗಿ ನನ್ನ ಸೇವಕ
ರಾದ ಪ್ರವಾದಿಗಳನ್ನು ಉಪಯೋಗಿಸಿಕೊಂಡೆ. ಆದರೆ ಆ
ಜನರು ಕೇಳಲಿಲ್ಲ.'' ಇದು ಯೆಹೋವನ ನುಡಿ.
[20]''ನೀವು ಬಂದಿಗಳು. ನಾನು ನಿಮ್ಮನ್ನು ಜೆರುಸಲೇಮ್
ಬಿಟ್ಟು ಬಾಬಿಲೋನಿಗೆ ಹೋಗುವಂತೆ ಒತ್ತಾಯಿಸಿದೆ.
ಆದುದರಿಂದ ಯೆಹೋವನ ಸಂದೇಶವನ್ನು ಕೇಳಿರಿ.''

[21]ಕೊಲಾಯನ ಮಗನಾದ ಅಹಾಬ ಮತ್ತು ಮಾಸೇ
ಯನ ಮಗನಾದ ಚಿದ್ಕೀಯ ಇವರ ವಿಷಯವಾಗಿ ಸರ್ವ
ಶಕ್ತನಾದ ಯೆಹೋವನು ಹೀಗೆಂದನು: ''ಇವರಿಬ್ಬರು
ನಿಮಗೆ ಸುಳ್ಳುಪ್ರವಾದನೆ ಮಾಡಿದ್ದಾರೆ. ಅವರ ಸಂದೇಶವು
ನನ್ನಿಂದ ಬಂದದ್ದು ಎಂದು ಅವರು ಹೇಳಿದ್ದಾರೆ. ಆದರೆ
ಅವರು ಹೇಳಿದ್ದು ಸುಳ್ಳು. ನಾನು ಆ ಇಬ್ಬರು ಪ್ರವಾದಿ
ಗಳನ್ನು ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನಿಗೆ
ಒಪ್ಪಿಸುವೆನು. ನೆಬೂಕದ್ನೆಚ್ಚರನು ಬಾಬಿಲೋನಿನಲ್ಲಿ
ಬಂದಿಯಾಗಿರುವ ನಿಮ್ಮೆಲ್ಲರ ಸಮ್ಮುಖದಲ್ಲಿ ಆ ಇಬ್ಬರು
ಪ್ರವಾದಿಗಳನ್ನು ಕೊಲ್ಲುವನು. [22]ಯೆಹೂದದ ಬಂದಿಗ
ಳೆಲ್ಲಾ ಬೇರೆಯವರಿಗೆ ಕೇಡಾಗಲಿ ಎಂದು ಕೇಳಿಕೊಳ್ಳು
ವಾಗ ಆ ಜನರ ಉದಾಹರಣೆ ಕೊಡುವರು. ಆ ಬಂಧಿಗಳು
ಹೀಗೆನ್ನುವರು: 'ಬಾಬಿಲೋನಿನ ರಾಜನು ಬೆಂಕಿಯಲ್ಲಿ
ಸುಟ್ಟುಬಿಟ್ಟ ಚಿದ್ಕೀಯನ ಮತ್ತು ಅಹಾಬನ ಗತಿಯನ್ನು
ಯೆಹೋವನು ನಿನಗೆ ತರಲಿ.' [23]ಆ ಪ್ರವಾದಿಗಳಿಬ್ಬರು
ಇಸ್ರೇಲಿನಲ್ಲಿ ಹೆಚ್ಚಿನ ದುರಾಚಾರವನ್ನು ನಡೆಸಿದರು.
ಅವರು ತಮ್ಮ ನೆರೆಯವರ ಹೆಂಡತಿಯರೊಂದಿಗೆ ವ್ಯಭಿ
ಚಾರ ಮಾಡಿದರು. ಅವರು ಸುಳ್ಳುಗಳನ್ನು ಹೇಳಿದರು.
ಆ ಸುಳ್ಳುಗಳನ್ನು ಯೆಹೋವನಾದ ನನ್ನ ಸಂದೇಶವೆಂದು
ಹೇಳಿದರು. ಹಾಗೆ ಮಾಡಲು ನಾನು ಅವರಿಗೆ ಹೇಳಿಲ್ಲ,
ಅವರು ಏನು ಮಾಡಿದ್ದಾರೆಂಬುದನ್ನು ನಾನು ಬಲ್ಲೆ.
ಅದಕ್ಕೆ ನಾನೇ ಸಾಕ್ಷಿ.'' ಇದು ಯೆಹೋವನ ಸಂದೇಶ.

### ಶೆಮಾಯನಿಗೆ ದೇವರ ಸಂದೇಶ

[24](ಯೆಹೋವನು ಯೆರೆಮೀಯನಿಗೆ ಈ ಅಪ್ಪಣೆ
ಯನ್ನು ಕೊಟ್ಟನು.) ನೀನು ನೆಹೆಲಾಮ್ಯನಾದ ಶೆಮಾಯ
ನಿಗೆ ಕೂಡ ಒಂದು ಸಂದೇಶವನ್ನು ಕೊಡು. [25]ಇಸ್ರೇಲಿನ
ದೇವರೂ ಸರ್ವಶಕ್ತನೂ ಆಗಿರುವ ಯೆಹೋವನು ಹೀಗೆ
ಹೇಳುವನು: ''ಶೆಮಾಯನೇ, ಜೆರುಸಲೇಮಿನಲ್ಲಿರುವ
ಎಲ್ಲಾ ಜನರಿಗೆ ನೀನು ಪತ್ರವನ್ನು ಕಳುಹಿಸಿದೆ. ನೀನು
ಮಾಸೇಯನ ಮಗನಾಗಿರುವ ಯಾಜಕ ಚೆಫನ್ಯನಿಗೂ
ಮತ್ತು ಎಲ್ಲಾ ಯಾಜಕರಿಗೂ ಪತ್ರಗಳನ್ನು ಕಳುಹಿಸಿದೆ.
ಆ ಪತ್ರಗಳನ್ನು ಯೆಹೋವನ ಆದೇಶದ ಪ್ರಕಾರ
ಕಳುಹಿಸದೆ, ನಿನ್ನ ಹೆಸರಿನಿಂದ ಕಳುಹಿಸಿದೆ. [26]ಶೆಮಾ
ಯನೇ, ನೀನು ಚೆಫನ್ಯನಿಗೆ ಬರೆದ ಪತ್ರದಲ್ಲಿ ಹೀಗೆ
ಹೇಳಿರುವೆ: 'ಚೆಫನ್ಯನೇ, ಯೆಹೋವನು ನಿನ್ನನ್ನು
ಯೆಹೋಯಾದನ ಸ್ಥಾನದಲ್ಲಿ ಯಾಜಕನನ್ನಾಗಿ ನೇಮಿಸಿ
ದ್ದಾನೆ. ನೀನು ಯೆಹೋವನ ಆಲಯದ ಮೇಲ್ವಿಚಾರಕ
ನಾಗಿರುವೆ. ಹುಚ್ಚನಂತೆ ವರ್ತಿಸುವ ಮತ್ತು ಪ್ರವಾದಿ
ಯಂತೆ ನಟಿಸುವ ವ್ಯಕ್ತಿಯನ್ನು ನೀನು ಬಂಧಿಸಬೇಕು,
ಅವನಿಗೆ ಕೋಳ ಹಾಕಿ ಕೊರಳಿಗೆ ಕಬ್ಬಿಣದ ಕಂಠಪಟ್ಟಿ
ಯನ್ನು ಹಾಕಬೇಕು. [27]ಈಗ ಯೆರೆಮೀಯನು ಪ್ರವಾದಿ
ಯಂತೆ ನಟಿಸುತ್ತಿದ್ದಾನೆ. ನೀನು ಅವನನ್ನು ಏಕೆ ಬಂಧಿಸ
ಲಿಲ್ಲ? [28]ಯೆರೆಮೀಯನು ಬಾಬಿಲೋನಿನಲ್ಲಿದ್ದ ನಮಗೆ
ಈ ಸಂದೇಶವನ್ನು ಕಳುಹಿಸಿದ್ದಾನೆ: ''ಬಾಬಿಲೋ
ನಿನಲ್ಲಿರುವ ನೀವು ಅಲ್ಲಿ ಬಹಳ ಕಾಲದವರೆಗೆ ಇರುವಿರಿ.
ಆದ್ದರಿಂದ ಮನೆಗಳನ್ನು ಕಟ್ಟಿಕೊಂಡು ಅಲ್ಲಿ ನೆಲೆಸಿರಿ;
ತೋಟಗಳನ್ನು ಬೆಳೆಸಿರಿ; ಮತ್ತು ನೀವು ಬೆಳೆದದ್ದನ್ನು
ಆಹಾರವನ್ನಾಗಿ ಬಳಸಿರಿ.'''

[29]ಯಾಜಕನಾದ ಚೆಫನ್ಯನು ಈ ಕಾಗದವನ್ನು ಪ್ರವಾದಿ
ಯಾದ ಯೆರೆಮೀಯನ ಮುಂದೆ ಓದಿದನು. [30]ಆಗ
ಯೆರೆಮೀಯನಿಗೆ ಯೆಹೋವನ ಸಂದೇಶವು ಬಂದಿತು.
[31]''ಯೆರೆಮೀಯನೇ, ಬಾಬಿಲೋನಿನಲ್ಲಿರುವ ಎಲ್ಲಾ
ಬಂಧಿಗಳಿಗೆ ಈ ಸಂದೇಶವನ್ನು ಕಳುಹಿಸು, 'ನೆಹೆಲಾಮ್ಯ
ನಾದ ಶೆಮಾಯನ ವಿಷಯದಲ್ಲಿ ಯೆಹೋವನು
ಹೀಗೆನ್ನುವನು: ಶೆಮಾಯನು ನಿಮಗೆ ಪ್ರವಾದನೆ ಮಾಡಿ
ದ್ದಾನೆ. ಆದರೆ ನಾನು ಅವನನ್ನು ಕಳುಹಿಸಲಿಲ್ಲ. ನೀವು
ಸುಳ್ಳನ್ನು ನಂಬುವಂತೆ ಅವನು ಮಾಡಿದ್ದಾನೆ. [32]ಆದ್ದರಿಂದ
ಅವನನ್ನು ನಾನು ತಕ್ಷಣ ದಂಡಿಸುತ್ತೇನೆ. ನಾನು ಅವನ
ಕುಟುಂಬವನ್ನು ಸಂಪೂರ್ಣವಾಗಿ ನಾಶಮಾಡುತ್ತೇನೆ.
ನಾನು ನನ್ನ ಜನರಿಗಾಗಿ ಮಾಡುವ ಒಳ್ಳೆಯವುಗಳಲ್ಲಿ
ಅವನು ಪಾಲು ಹೊಂದುವುದಿಲ್ಲ.''' ಇದು ಯೆಹೋವನ
ನುಡಿ. '''ಶೆಮಾಯನು, ಜನರನ್ನು ಯೆಹೋವನಾದ ನನ್ನ
ವಿರುದ್ಧ ತಿರುಗುವಂತೆ ಮಾಡಿದ್ದರಿಂದ ನಾನು ಅವನನ್ನು
ದಂಡಿಸುವೆನು.''

### ಆಶಾದಾಯಕವಾದ ವಾಗ್ದಾನಗಳು

30 ಯೆಹೋವನಿಂದ ಯೆರೆಮೀಯನಿಗೆ ಈ
ಸಂದೇಶ ಬಂದಿತು. 2ಇಸ್ರೇಲರ ದೇವರಾದ
ಯೆಹೋವನು ಹೀಗೆ ಹೇಳಿದನು: ‘‘ಯೆರೆಮೀಯನೇ,
ನಾನು ನಿನಗೆ ಹೇಳಿದ ಸಂಗತಿಗಳನ್ನು ಒಂದು ಪುಸ್ತಕದಲ್ಲಿ
ಬರೆದಿಡು. ಈ ಪುಸ್ತಕವನ್ನು ನೀನೇ ಬರೆಯಬೇಕು.
3ಏಕೆಂದರೆ ನಾನು ನನ್ನ ಜನರಾದ ಇಸ್ರೇಲರನ್ನು ಮತ್ತು
ಯೆಹೂದ್ಯರನ್ನು ಸೆರೆವಾಸದಿಂದ ಕರೆದುಕೊಂಡು ಬರುವ
ದಿನಗಳು ಬರುತ್ತಿವೆ’’ ಈ ಸಂದೇಶವು ಯೆಹೋವನಿಂದ
ಬಂದದ್ದು. ‘‘ಆ ಜನರನ್ನು ನಾನು ಅವರ ಪೂರ್ವಿಕರಿಗೆ
ಕೊಟ್ಟ ಪ್ರದೇಶದಲ್ಲಿ ನೆಲೆನಿಲ್ಲಿಸುತ್ತೇನೆ. ಆಗ ನನ್ನ ಜನರು
ಆ ಪ್ರದೇಶದ ಒಡೆತನ ಪಡೆಯುವರು.’’

4ಇಸ್ರೇಲಿನ ಮತ್ತು ಯೆಹೂದದ ಜನರ ಬಗ್ಗೆ
ಯೆಹೋವನು ಈ ಸಂದೇಶವನ್ನು ಕೊಟ್ಟನು:

5 ‘‘ಜನರು ಭಯದಿಂದ ಗೋಳಿಡುವದನ್ನು ನಾವು
ಕೇಳುತ್ತಿದ್ದೇವೆ. ಜನರು ಅಂಜಿಕೊಂಡಿದ್ದಾರೆ:
ನೆಮ್ಮದಿಯಿಲ್ಲದವರಾಗಿದ್ದಾರೆ.
6 ‘‘ಈ ಪ್ರಶ್ನೆಯನ್ನು ಕೇಳಿ ಪರಿಶೀಲಿಸಿರಿ. ಪುರುಷನು
ಮಗುವಿಗೆ ಜನ್ಮಕೊಡಬಲ್ಲನೇ? ಖಂಡಿತ
ವಾಗಿಯೂ ಇಲ್ಲ. ಹಾಗಾದರೆ ಪ್ರತಿಯೊಬ್ಬ ಬಲಿ
ಷ್ಠನೂ ಪ್ರಸವವೇದನೆಪಡುತ್ತಿರುವ ಸ್ತ್ರೀಯಂತೆ
ತನ್ನ ಹೊಟ್ಟೆಯನ್ನು ಏಕೆ ಹಿಡಿದುಕೊಂಡಿದ್ದಾನೆ?
ಪ್ರತಿಯೊಬ್ಬನ ಮುಖವು ಸತ್ತವನ ಮುಖದಂತೆ ಏಕೆ
ಬಿಳಿಚಿದೆ? ಏಕೆಂದರೆ ಜನರು ಬಹಳ ಭಯ
ಪಟ್ಟಿದ್ದಾರೆ.

7 ‘‘ಇದು ಯಾಕೋಬ್ಯರಿಗೆ ಬಹು ಮುಖ್ಯವಾದ
ಸಮಯ. ಇದು ಬಹಳ ಕಷ್ಟದ ಸಮಯ. ಎಂದೂ
ಇಂಥ ಕಷ್ಟದ ಸಮಯ ಬರುವದಿಲ್ಲ. ಆದರೆ
ಯಾಕೋಬ್* ಇದರಿಂದ ಪಾರಾಗುವುದು.’’

8ಇದು ಸರ್ವಶಕ್ತನಾದ ಯೆಹೋವನ ನುಡಿ. ‘‘ಆ
ಸಮಯದಲ್ಲಿ ನಾನು ಇಸ್ರೇಲರ ಮತ್ತು ಯೆಹೂದ್ಯರ
ಹೆಗಲ ಮೇಲಿನ ನೊಗವನ್ನು ಮುರಿದುಬಿಡುವೆನು.
ನಿಮಗೆ ಕಟ್ಟಿರುವ ಹಗ್ಗಗಳನ್ನು ಕಿತ್ತುಹಾಕುವೆನು. ಪರ
ದೇಶದವರು ಮತ್ತೆಂದಿಗೂ ನನ್ನ ಜನರನ್ನು ದಾಸರನ್ನಾಗಿ
ಮಾಡಿಕೊಳ್ಳಲು ಸಾಧ್ಯವಾಗುವುದಿಲ್ಲ. 9ಇಸ್ರೇಲರು
ಮತ್ತು ಯೆಹೂದ್ಯರು ಪರದೇಶಿಯರ ಸೇವೆ ಮಾಡುವು
ದಿಲ್ಲ. ಅವರು ತಮ್ಮ ದೇವರಾದ ಯೆಹೋವನ ಸೇವೆ
ಯನ್ನೇ ಮಾಡುವರು, ಅವರು ತಮ್ಮ ರಾಜನಾದ
ದಾವೀದನ* ಸೇವೆಮಾಡುವರು, ನಾನು ಆ ರಾಜನನ್ನು
ಕಳುಹಿಸುವೆನು.

10 ಯೆಹೋವನು ಹೀಗೆಂದನು: ‘‘ನನ್ನ ಸೇವಕನಾದ
ಯಾಕೋಬನೇ, ಭಯಪಡಬೇಡ! ಇಸ್ರೇಲೇ,
ಅಂಜಬೇಡ, ನಾನು ನಿಮ್ಮನ್ನು ಆ ದೂರಪ್ರದೇಶ
ದಿಂದ ರಕ್ಷಿಸುವೆನು. ಆ ದೂರದೇಶದಲ್ಲಿ ನೀವು
ಬಂದಿಗಳಾಗಿದ್ದೀರಿ, ಆದರೆ ನಾನು ನಿಮ್ಮ
ವಂಶದವರನ್ನು ರಕ್ಷಿಸುತ್ತೇನೆ. ಅವರನ್ನು ಆ ನಾಡಿ
ನಿಂದ ಮತ್ತೆ ಕರೆದುತರುತ್ತೇನೆ. ಯಾಕೋಬು
ಮತ್ತೆ ನೆಮ್ಮದಿಯಿಂದ ಇರುವುದು. ಜನರು
ಯಾಕೋಬನ್ನು ಪೀಡಿಸುವದಿಲ್ಲ; ನನ್ನ ಜನರನ್ನು
ಹೆದರಿಸುವ ಶತ್ರುಗಳಿರುವದಿಲ್ಲ. ಇದು
ಯೆಹೋವನ ನುಡಿ.
11 ಇಸ್ರೇಲರೇ, ಯೆಹೂದ್ಯರೇ ನಾನು ನಿಮ್ಮೊಂದಿಗಿ
ದ್ದೇನೆ. ನಾನು ನಿಮ್ಮನ್ನು ರಕ್ಷಿಸುತ್ತೇನೆ. ನಾನು
ನಿಮ್ಮನ್ನು ಆ ಜನಾಂಗಗಳ ಬಳಿಗೆ ಕಳುಹಿಸಿದೆ.
ಆದರೆ ನಾನು ಆ ಎಲ್ಲಾ ಜನಾಂಗಗಳನ್ನು
ಸಂಪೂರ್ಣವಾಗಿ ನಾಶಮಾಡುವೆನು. ಇದು ನಿಜ.
ನಾನು ಆ ಜನಾಂಗಗಳನ್ನು ನಾಶಮಾಡುವೆನು.
ಆದರೆ ನಾನು ನಿಮ್ಮನ್ನು ನಾಶಮಾಡುವದಿಲ್ಲ.
ನೀವು ಮಾಡಿದ ದುಷ್ಕೃತ್ಯಗಳಿಗಾಗಿ ನಿಮಗೆ ದಂಡನೆ
ಯಾಗಲೇಬೇಕು. ನಾನು ನಿಮ್ಮನ್ನು ಸರಿಯಾಗಿ
ಶಿಕ್ಷಿಸುತ್ತೇನೆ.’’
12 ಯೆಹೋವನು ಇಂತೆನ್ನುತ್ತಾನೆ. ‘‘ಇಸ್ರೇಲಿನ
ಮತ್ತು ಯೆಹೂದದ ಜನರಾದ ನಿಮಗೆ ಗುಣ
ವಾಗದ ಗಾಯವಾಗಿದೆ. ನಿಮಗೆ ವಾಸಿಯಾಗದ
ನೋವಾಗಿದೆ.
13 ನಿಮ್ಮನ್ನು ನೋಡಿಕೊಳ್ಳಲು ಯಾರೂ ಇಲ್ಲ. ಆದು
ದರಿಂದ ನಿಮ್ಮ ಗಾಯಗಳು ವಾಸಿಯಾಗುವದಿಲ್ಲ.
14 ನೀವು ಅನೇಕ ಜನಾಂಗಗಳೊಡನೆ ಸ್ನೇಹ
ಮಾಡಿದಿರಿ. ಆದರೆ ಆ ಜನಾಂಗಗಳು ನಿಮ್ಮ ಕಡೆಗೆ
ಗಮನಕೊಡುವದಿಲ್ಲ. ನಿಮ್ಮ ‘‘ಸ್ನೇಹಿತರು’’
ನಿಮ್ಮನ್ನು ಮರೆತಿದ್ದಾರೆ. ನಾನು ಶತ್ರುವಿನಂತೆ
ನಿಮ್ಮನ್ನು ನೋಯಿಸಿದೆ. ನಾನು ನಿಮಗೆ ಬಹಳ
ಕಠಿಣವಾದ ಶಿಕ್ಷೆಯನ್ನು ಕೊಟ್ಟೆ, ನಿಮ್ಮ ಮಹಾ
ಪರಾಧಗಳಿಗಾಗಿ ನಾನು ಹೀಗೆ ಮಾಡಿದೆ. ನಿಮ್ಮ
ಅನೇಕ ಪಾಪಗಳಿಗಾಗಿ ನಾನು ಹೀಗೆ ಮಾಡಿದೆ.
15 ಇಸ್ರೇಲೇ, ಯೆಹೂದವೇ, ನೀವು ನಿಮ್ಮ ಗಾಯ
ಗಳಿಗಾಗಿ ಏಕೆ ಅರಚುವಿರಿ? ನಿಮ್ಮ ಗಾಯ
ಆಳವಾಗಿದೆ ಮತ್ತು ಅದಕ್ಕೆ ಔಷಧಿಯಿಲ್ಲ.

**ಯಾಕೋಬ್** ಇಸ್ರೇಲಿಗಿರುವ ಮತ್ತೊಂದು ಹೆಸರು.

**ದಾವೀದ** ಇಸ್ರೇಲಿನ ಇನ್ನೊಬ್ಬ ರಾಜ.

ಯೆಹೋವನಾದ ನಾನು ನಿಮ್ಮ ಮಹಾಪರಾಧ
ಕ್ಕಾಗಿ ಹೀಗೆಲ್ಲ ಮಾಡಿದೆ. ನಾನು ನಿಮ್ಮ ಅನೇಕ
ಪಾಪಗಳಿಗಾಗಿ ಹೀಗೆಲ್ಲ ಮಾಡಿದೆ.
16 ಆ ಜನಾಂಗಗಳು ನಿಮ್ಮನ್ನು ನಾಶಗೊಳಿಸಿದವು.
ಆದರೆ ಈಗ ಆ ಜನಾಂಗಗಳನ್ನು ನಾಶಪಡಿಸ
ಲಾಗಿದೆ. ಇಸ್ರೇಲೇ, ಯೆಹೂದವೇ, ನಿಮ್ಮ ಶತ್ರು
ಗಳು ಬಂಧಿಗಳಾಗುತ್ತಾರೆ. ಅವರು ನಿಮ್ಮ ವಸ್ತು
ಗಳನ್ನು ಕದ್ದುಕೊಂಡಿದ್ದಾರೆ. ಆದರೆ ಬೇರೆಯ
ವರು ಅವರ ವಸ್ತುಗಳನ್ನು ಕದಿಯುವರು. ಅವರು
ಯುದ್ಧದಲ್ಲಿ ನಿಮ್ಮ ವಸ್ತುಗಳನ್ನು ತೆಗೆದು
ಕೊಂಡರು. ಆದರೆ ಬೇರೆಯವರು ಯುದ್ಧದಲ್ಲಿ
ಅವರ ವಸ್ತುಗಳನ್ನು ತೆಗೆದುಕೊಳ್ಳುವರು.''
17 ಇದು ಯೆಹೋವನ ನುಡಿ. ''ನಾನು ಪುನಃ ನಿಮಗೆ
ಆರೋಗ್ಯವನ್ನು ಕೊಡುವೆನು; ನಿಮ್ಮ ಗಾಯಗ
ಳನ್ನು ವಾಸಿ ಮಾಡುವೆನು. ಏಕೆಂದರೆ ಚೀಯೋನ್
ಭ್ರಷ್ಟಳಾದಳೆಂದೂ 'ಯಾರಿಗೂ ಬೇಡವಾದ
ನಗರ'ವೆಂದೂ ಬೇರೆಯವರು ಹೇಳಿದರು.''
18 ಯೆಹೋವನು ಇಂತೆನ್ನುತ್ತಾನೆ, ''ಯಾಕೋಬಿನ
ಜನರು ಈಗ ಬಂದಿಗಳಾಗಿದ್ದಾರೆ. ಆದರೆ ಅವರು
ಹಿಂತಿರುಗಿ ಬರುವರು. ಯಾಕೋಬಿನ ಮನೆಗಳ
ಮೇಲೆ ನಾನು ಕನಿಕರ ತೋರುವೆನು. ನಗರವು
ಈಗ ಕೇವಲ ಹಾಳುಬಿದ್ದ ಮನೆಗಳಿಂದ ಕೂಡಿದ
ಒಂದು ದಿಬ್ಬವಾಗಿದೆ. ಆದರೆ ಆ ನಗರವು ಮತ್ತೆ
ನಿರ್ಮಿಸಲ್ಪಡುವುದು. ಮುಂಚೆ ಇದ್ದ ಸ್ಥಳದಲ್ಲಿ
ಅರಮನೆಯನ್ನು ಕಟ್ಟಲಾಗುವುದು.
19 ಆ ಸ್ಥಳಗಳಲ್ಲಿ ಜನರು ಸ್ತೋತ್ರಗೀತೆಗಳನ್ನು ಹಾಡು
ವರು. ಅಲ್ಲಿ ನಗುವಿನ ಧ್ವನಿಯು ಕೇಳಿಬರುವುದು.
ನಾನು ಅವರಿಗೆ ಹಲವಾರು ಮಕ್ಕಳನ್ನು ಕೊಡು
ವೆನು. ಇಸ್ರೇಲ್ ಮತ್ತು ಯೆಹೂದ ಚಿಕ್ಕವುಗಳಾಗಿ
ರುವದಿಲ್ಲ. ನಾನು ಅವುಗಳಿಗೆ ಗೌರವವನ್ನು
ತರುತ್ತೇನೆ. ಯಾರೂ ಅವುಗಳನ್ನು ಕೀಳಾಗಿ
ಕಾಣುವದಿಲ್ಲ.

20 ''ಯಾಕೋಬಿನ ಸಂತಾನದವರು ಮೊದಲಿನ ಸ್ಥಿತಿ
ಯನ್ನು ಹೊಂದುವರು. ನಾನು ಇಸ್ರೇಲರನ್ನೂ
ಯೆಹೂದ್ಯರನ್ನೂ ಬಲಶಾಲಿಗಳನ್ನಾಗಿ ಮಾಡು
ವೆನು. ಅವರನ್ನು ಪೀಡಿಸುವ ಜನರನ್ನು
ಶಿಕ್ಷಿಸುವೆನು.
21 ಅವರಲ್ಲೇ ಒಬ್ಬನು ಅವರಿಗೆ ನಾಯಕನಾಗಿರು
ವನು. ಆ ನಾಯಕನು ನನ್ನ ಜನರಿಂದಲೇ ಬರು
ವನು. ನಾನು ಹೇಳಿದರೆ ಮಾತ್ರ ಜನರು ನನ್ನ
ಹತ್ತಿರಕ್ಕೆ ಬರಲು ಸಾಧ್ಯ. ಆದುದರಿಂದ ನಾನು ಆ
ನಾಯಕನನ್ನು ನನ್ನ ಹತ್ತಿರ ಬರಲು ಹೇಳುವೆನು.
ಅವನು ನನಗೆ ತುಂಬಾ ಹತ್ತಿರದವನಾಗುವನು.
22 ನೀವು ನನ್ನ ಜನರಾಗುವಿರಿ ಮತ್ತು ನಾನು ನಿಮ್ಮ
ದೇವರಾಗುವೆನು.''
23 ''ಯೆಹೋವನು ಬಹಳ ಕೋಪತಾಳಿದ್ದನು. ಅವನು
ಜನರನ್ನು ಶಿಕ್ಷಿಸಿದನು. ಆ ಶಿಕ್ಷೆಯು ಒಂದು ಬಿರು
ಗಾಳಿಯಂತೆ ಬಂದಿತು. ಆ ಶಿಕ್ಷೆಯು ದುಷ್ಟಜನರ
ಮೇಲೆ ತೂಫಾನಿನಂತೆ ಬಂದಿತು.
24 ಜನರನ್ನು ಸಂಪೂರ್ಣವಾಗಿ ಶಿಕ್ಷಿಸುವವರೆಗೆ
ಯೆಹೋವನು ಕೋಪಿಷ್ಟನಾಗಿಯೇ ಇರುವನು.
ಯೆಹೂದದ ಜನರಾದ ನೀವು ಅದನ್ನು ಕೊನೆಯ
ದಿನಗಳಲ್ಲಿ ತಿಳಿದುಕೊಳ್ಳುವಿರಿ.''

### ಇಸ್ರೇಲಿನ ನವನಿರ್ಮಾಣ

31 ಯೆಹೋವನು ಈ ವಿಷಯಗಳನ್ನು ಹೇಳಿದನು.
''ಆ ಸಮಯದಲ್ಲಿ ನಾನು ಇಸ್ರೇಲಿನ ಎಲ್ಲಾ
ಗೋತ್ರಗಳ ದೇವರಾಗಿರುವೆನು; ಅವರು ನನ್ನ ಪ್ರಜೆಗ
ಳಾಗಿರುವರು.''

2 ಯೆಹೋವನು ಇಂತೆನ್ನುತ್ತಾನೆ, ''ಶತ್ರುವಿನ
ಖಡ್ಗಕ್ಕೆ ಕೆಲವು ಜನರು ಆಹುತಿಯಾಗಿಲ್ಲ. ಅವರಿಗೆ
ಮರುಭೂಮಿಯಲ್ಲಿ ನೆಮ್ಮದಿ ದೊರೆಯುವುದು.
ಇಸ್ರೇಲು ವಿಶ್ರಾಂತಿಯನ್ನು ಬಯಸಿ ಬರುವುದು.''
3 ದೂರದಿಂದ ಯೆಹೋವನು ತನ್ನ ಜನರಿಗೆ ದರ್ಶನ
ವನ್ನು ಕೊಡುವನು. ಯೆಹೋವನು ಇಂತೆನ್ನು
ವನು, ''ನಾನು ನಿಮ್ಮನ್ನು ಪ್ರೀತಿಸುತ್ತೇನೆ, ನನ್ನ
ಪ್ರೇಮವು ಶಾಶ್ವತವಾದದ್ದು. ನಾನು ಎಂದೆಂದಿಗೂ
ನಿಮ್ಮ ಹಿತೈಷಿಯಾಗಿರುವೆನು.
4 ''ನನ್ನ ವಧುವಾದ ಇಸ್ರೇಲೇ, ನಾನು ನಿನ್ನನ್ನು ಮತ್ತೆ
ನಿರ್ಮಿಸುವೆನು, ಆಗ ನೀನು ಮತ್ತೆ ಒಂದು
ಜನಾಂಗವಾಗುವೆ. ನೀನು ಮೊದಲಿನಂತೆ ನಿಮ್ಮ
ತಮ್ಮಟೆಯನ್ನು ತೆಗೆದುಕೊಂಡು ಸಂತೋಷದಿಂದ
ನೃತ್ಯ ಮಾಡುವವರೊಡನೆ ನೃತ್ಯ ಮಾಡುವೆ.
5 ಇಸ್ರೇಲಿನ ರೈತರಾದ ನೀವು ಮತ್ತೆ ದ್ರಾಕ್ಷಿ ತೋಟ
ಗಳನ್ನು ಬೆಳೆಸುವಿರಿ. ನೀವು ಸಮಾರ್ಯ ನಗರದ
ಸುತ್ತಮುತ್ತಲಿನ ಬೆಟ್ಟಗಳಲ್ಲಿ ಆ ದ್ರಾಕ್ಷಿ ತೋಟ
ವನ್ನು ಬೆಳೆಸುವಿರಿ. ರೈತರಾದ ನೀವು ಅದರ ಫಲ
ವನ್ನು ಅನುಭವಿಸುವಿರಿ.
6 ಒಂದು ಕಾಲ ಬರುವುದು, ಆಗ ಕಾವಲುಗಾರರು
'ಬನ್ನಿ, ಚೀಯೋನಿಗೆ ನಮ್ಮ ದೇವರಾದ
ಯೆಹೋವನನ್ನು ಆರಾಧಿಸಲು ಹೋಗೋಣ'
ಎಂದು ಕೂಗುವರು. ಎಫ್ರಾಯೀಮಿನ ಬೆಟ್ಟ

ಪ್ರದೇಶದ ಕಾವಲುಗಾರರು ಸಹ ಹೀಗೆಯೇ
ಕೂಗುವರು.''
7 ಯೆಹೋವನು ಹೀಗೆಂದನು: ''ಸಂತೋಷ
ದಿಂದಿರಿ. ಯಾಕೋಬಿಗೋಸ್ಕರ ಹಾಡಿರಿ. ಮಹಾ
ಜನಾಂಗವಾದ ಇಸ್ರೇಲಿಗೋಸ್ಕರ ಹರ್ಷ ಧ್ವನಿ
ಮಾಡಿರಿ. ಸ್ತೋತ್ರಗೀತೆಗಳನ್ನು ಹಾಡಿರಿ.
'ಯೆಹೋವನು ತನ್ನ ಜನರನ್ನು ರಕ್ಷಿಸಿದನು.
ಇಸ್ರೇಲ್ ಜನಾಂಗದಲ್ಲಿ ಅಳಿದುಳಿದ ಜನರನ್ನು
ಆತನು ರಕ್ಷಿಸಿದನು' ಎಂದು ಕೂಗಿರಿ.
8 ನಾನು ಇಸ್ರೇಲರನ್ನು ಉತ್ತರದ ದೇಶದಿಂದ ತರು
ವೆನು. ನಾನು ಜಗತ್ತಿನ ದೂರದೂರದ ಸ್ಥಳಗಳಿಂದ
ಇಸ್ರೇಲರನ್ನು ಒಟ್ಟುಗೂಡಿಸುವೆನೆಂದು ತಿಳಿದು
ಕೊಳ್ಳಿರಿ. ಅವರಲ್ಲಿ ಕೆಲವರು ಕುರುಡರಾಗಿರು
ವರು; ಕುಂಟರಾಗಿರುವರು, ಕೆಲವು ಸ್ತ್ರೀಯರು
ಗರ್ಭಿಣಿಯರಾಗಿದ್ದು ಹೆರಿಗೆಯ ದಿನಗಳು ತುಂಬಿ
ದವರಾಗಿರುತ್ತಾರೆ. ಬಹಳಷ್ಟು ಜನರು ಹಿಂದಿರುಗಿ
ಬರುತ್ತಾರೆ.
9 ಆ ಜನರು ಹಿಂತಿರುಗಿ ಬರುವಾಗ ಅಳುತ್ತಿರುವರು.
ಆದರೆ ನಾನು ಅವರಿಗೆ ದಾರಿತೋರಿಸುವೆನು,
ಸಮಾಧಾನ ಪಡಿಸುವೆನು. ನಾನು ಅವರನ್ನು ನದಿ
ದಾಟಿಸಿಕೊಂಡು ಬರುವೆನು. ಅವರು ಎಡವದಂತೆ
ಸಮವಾದ ಮಾರ್ಗದಲ್ಲಿ ನಡೆಸಿಕೊಂಡು ಬರು
ವೆನು. ನಾನು ಇಸ್ರೇಲಿನ ತಂದೆ; ಎಫ್ರಾಯೀಮು
ನನ್ನ ಚೊಚ್ಚಲ ಮಗ. ಆದ್ದರಿಂದಲೇ ನಾನು
ಅವರನ್ನು ನಡೆಸಿಕೊಂಡು ಬರುವೆನು.
10 ''ಜನಾಂಗಗಳೇ, ಯೆಹೋವನ ಈ ಸಂದೇಶವನ್ನು
ಕೇಳಿರಿ. ಈ ಸಂದೇಶವನ್ನು ಸಮುದ್ರದಡದ ದೂರ
ದೂರದ ಪ್ರದೇಶಗಳಲ್ಲಿ ತಿಳಿಸಿರಿ. 'ಇಸ್ರೇಲರನ್ನು
ಚದುರಿಸಿದಾತನು ಅವರನ್ನು ಮತ್ತೆ ಒಟ್ಟುಗೂಡಿ
ಸುವನು. ಆತನು ತನ್ನ ಹಿಂಡನ್ನು ಕುರುಬನಂತೆ
ನೋಡಿಕೊಳ್ಳುವನು' ಎಂದು ಹೇಳಿರಿ.
11 ಯೆಹೋವನು ಯಾಕೋಬ್ಯರನ್ನು ಹಿಂದಕ್ಕೆ
ಕರೆದುಕೊಂಡು ಬರುವನು. ಯೆಹೋವನು ತನ್ನ
ಜನರನ್ನು ಅವರಿಗಿಂತಲೂ ಬಲಿಷ್ಠರಾದ ಜನ
ರಿಂದ ರಕ್ಷಿಸುವನು.
12 ಇಸ್ರೇಲಿನ ಜನರು ಚೀಯೋನ್ ಶಿಖರಕ್ಕೆ
ಬರುವರು; ಸಂತೋಷದಿಂದ ನಲಿದಾಡುವರು.
ದೇವರು ಅವರಿಗೆ ಅನುಗ್ರಹಿಸುವ ಎಲ್ಲಾ ಶ್ರೇಷ್ಠ
ವಾದ ವಸ್ತುಗಳಿಂದ ಸಂತೋಷಚಿತ್ತರಾದ ಅವರ
ಮುಖಗಳು ಪ್ರಕಾಶಮಾನವಾಗುವವು. ಯೆಹೋ
ವನು ಅವರಿಗೆ ಧಾನ್ಯ, ಹೊಸ ದ್ರಾಕ್ಷಾರಸ, ಎಣ್ಣೆ,
ಕುರಿಮರಿಗಳು ಮತ್ತು ಹಸುಗಳನ್ನು ದಯಪಾಲಿ
ಸುವನು. ಅವರು ಸಾಕಷ್ಟು ನೀರಿರುವ ತೋಟ
ದಂತೆ ಲವಲವಿಕೆಯಿಂದ ಇರುವರು. ಇಸ್ರೇಲರು
ಇನ್ನು ಯಾವ ತೊಂದರೆಗೂ ಒಳಗಾಗುವುದಿಲ್ಲ.
13 ''ಆಗ ಇಸ್ರೇಲಿನ ತರುಣಿಯರು ಸಂತೋಷದಿಂದ
ನರ್ತಿಸುವರು. ತರುಣರು ಮತ್ತು ವೃದ್ಧರು ಆ
ನರ್ತನದಲ್ಲಿ ಭಾಗವಹಿಸುವರು. ನಾನು ಅವರ
ದುಃಖವನ್ನು ಸಂತೋಷದಲ್ಲಿ ಪರಿವರ್ತಿಸುವೆನು.
ನಾನು ಇಸ್ರೇಲರನ್ನು ಸಂತೈಸುವೆನು. ಅವರ ದುಃಖ
ವನ್ನು ಹೋಗಲಾಡಿಸಿ ಅವರನ್ನು ಸಂತೋಷ
ಗೊಳಿಸುವೆನು.
14 ಯಾಜಕರು ತಮಗೆ ಬೇಕಾಗುವದಕ್ಕಿಂತ ಹೆಚ್ಚಿನ
ಪ್ರಮಾಣದಲ್ಲಿ ನೈವೇದ್ಯಗಳನ್ನು ಪಡೆಯುವರು.
ನಾನು ಅವರಿಗೆ ಕೊಡುವ ಉತ್ತಮ ವಸ್ತುಗಳನ್ನು
ಮನದಣಿಯುವ ಹಾಗೆ ಅನುಭವಿಸಿ ನನ್ನ ಜನರು
ತೃಪ್ತಿಪಡುವರು.'' ಇದು ಯೆಹೋವನ ನುಡಿ.
15 ಯೆಹೋವನು ಇಂತೆನ್ನುತ್ತಾನೆ: ''ರಾಮದಲ್ಲಿ ಅತಿ
ದುಃಖದಿಂದ ಗೋಳಾಡುವ ಒಂದು ಧ್ವನಿಯು
ಕೇಳಿಬರುತ್ತದೆ. ರಾಹೇಲಳು* ತನ್ನ ಮಕ್ಕಳಿಗಾಗಿ
ಗೋಳಾಡುವಳು. ಅವಳ ಮಕ್ಕಳು ಸತ್ತು ಹೋದು
ದರಿಂದ ರಾಹೇಲಳು ಸಮಾಧಾನ ಹೊಂದುವದಕ್ಕೆ
ಒಪ್ಪಲಾರಳು.''
16 ಆದರೆ ಯೆಹೋವನು, ''ಅಳುವದನ್ನು ನಿಲ್ಲಿಸು.
ಕಣ್ಣಿನಲ್ಲಿ ನೀರು ತುಂಬಿಕೊಳ್ಳಬೇಡ. ನಿನ್ನ ಕೆಲಸ
ಕ್ಕಾಗಿ ನಿನಗೆ ಪ್ರತಿಫಲ ಸಿಕ್ಕುವುದು'' ಎಂದು ಹೇಳು
ವನು. ಇದು ಯೆಹೋವನ ನುಡಿ. ''ಇಸ್ರೇಲರು
ತಮ್ಮ ಶತ್ರುಗಳ ಪ್ರದೇಶದಿಂದ ಹಿಂತಿರುಗಿ
ಬರುವರು.
17 ಆದುದರಿಂದ ಇಸ್ರೇಲೇ, ನಿನ್ನ ಮಕ್ಕಳು ತಮ್ಮ
ದೇಶಕ್ಕೆ ಹಿಂತಿರುಗಿ ಬರುವರೆಂಬ ಆಶೆ
ನಿನಗಿರಲಿ.'' ಇದು ಯೆಹೋವನ ನುಡಿ.
18 ''ಎಫ್ರಾಯೀಮ್ ಅಳುವುದನ್ನು ನಾನು ಕೇಳಿದ್ದೇನೆ.
ಎಫ್ರಾಯೀಮು ಹೀಗೆ ಹೇಳುವದನ್ನು ನಾನು
ಕೇಳಿದ್ದೇನೆ. 'ಯೆಹೋವನೇ, ನೀನು ನಿಜವಾಗಿ
ನನ್ನನ್ನು ದಂಡಿಸಿದೆ. ನಾನು ಪಾಠವನ್ನು ಕಲಿತೆನು.
ನಾನು ತರಬೇತಿ ಹೊಂದದ ಒಂದು ಹೋರಿ
ಯುಂತಿದ್ದೆನು. ನನ್ನನ್ನು ದಂಡಿಸುವದನ್ನು ದಯ
ವಿಟ್ಟು ನಿಲ್ಲಿಸು. ನಾನು ನಿನ್ನಲ್ಲಿಗೆ ಹಿಂದಿರುಗಿ
ಬರುತ್ತೇನೆ. ನಿಜವಾಗಿಯೂ ನೀನೇ ನನ್ನ ದೇವ
ರಾದ ಯೆಹೋವನು.

---

**ರಾಹೇಲಳು** ಯಾಕೋಬನ ಹೆಂಡತಿ. ಇಲ್ಲಿ ಬಾಬಿಲೋನಿನ ಸೈನಿಕರ ದಾಳಿಯಲ್ಲಿ ತಮ್ಮ ಗಂಡಂದಿರನ್ನು ಮತ್ತು ಮಕ್ಕಳನ್ನು ಕಳೆದುಕೊಂಡ ಎಲ್ಲಾ ಹೆಂಗಸರು ಎಂದು ಅರ್ಥ.

19 ಯೆಹೋವನೇ, ನಾನು ನಿನಗೆ ದೂರವಾಗಿ ಅಲೆ
ದಾಡಿದೆನು. ಆದರೆ ನಾನು ಮಾಡಿದ ದುಷ್ಕೃತ್ಯಗಳ
ಬಗ್ಗೆ ತಿಳಿದುಕೊಂಡೆನು. ಆದುದರಿಂದ ನಾನು
ನನ್ನ ಮನಸ್ಸನ್ನೂ ಜೀವನವನ್ನೂ ಪರಿವರ್ತಿಸಿ
ಕೊಂಡೆ. ತಾರುಣ್ಯಾವಸ್ಥೆಯಲ್ಲಿ ನಾನು ಮಾಡಿದ
ಮೂರ್ಖತನಕ್ಕಾಗಿ ಲಜ್ಜೆಗೊಂಡೆನು; ನಾಚಿಕೆ
ಪಟ್ಟೆನು.'''
20 ಯೆಹೋವನು ಇಂತೆನ್ನುತ್ತಾನೆ: ''ಎಫ್ರಾಯೀಮ್
ನನ್ನ ಪ್ರೀತಿಯ ಮಗನೆಂಬುದು ನೀನು ಬಲ್ಲೆ.
ನಾನು ಆ ಮಗುವನ್ನು ಪ್ರೀತಿಸುತ್ತೇನೆ. ಹೌದು,
ನಾನು ಹಲವು ಸಲ ಎಫ್ರಾಯೀಮನ ವಿರುದ್ಧವಾಗಿ
ಮಾತನಾಡುತ್ತೇನೆ. ಆದಾಗ್ಯೂ ನಾನು ಅವನನ್ನು
ಜ್ಞಾಪಿಸಿಕೊಳ್ಳುತ್ತೇನೆ. ನಾನು ಅವನನ್ನು ತುಂಬಾ
ಪ್ರೀತಿಸುತ್ತೇನೆ. ನಾನು ನಿಜವಾಗಿಯೂ ಅವನನ್ನು
ಸಂತೈಸಬಯಸುತ್ತೇನೆ.'' ಇದು ಯೆಹೋವನ
ನುಡಿ.

21 ''ಇಸ್ರೇಲರೇ, ದಾರಿತೋರುವ ಕಂಬಗಳನ್ನೂ ಕೈ
ಮರಗಳನ್ನೂ ನೆಡಿರಿ. ನೀವು ಪ್ರಯಾಣ ಮಾಡು
ತ್ತಿರುವ ರಸ್ತೆಯನ್ನು ಗಮನಿಸಿರಿ. ನಿಮ್ಮ ಊರುಗ
ಳಿಗೆ ಹಿಂತಿರುಗಿ ಬನ್ನಿ. ನನ್ನ ವಧುವಾದ ಇಸ್ರೇಲೇ,
ಮನೆಗೆ ಬಾ.
22 ನೀನು ಅಪನಂಬಿಗಸ್ತಳಾದ ಮಗಳಾಗಿದ್ದೆ. ಆದರೆ
ನೀನು ಬದಲಾವಣೆ ಹೊಂದಿದೆ. ಈಗ ನೀನು
ಮನೆಗೆ ಹಿಂದಿರುಗಿ ಬರಲು ಎಷ್ಟು ಹೊತ್ತು ಕಾದು
ಕೊಂಡಿರುವೆ. ಯೆಹೋವನು ಲೋಕದಲ್ಲಿ
ಅಪೂರ್ವವಾದುದ್ದನ್ನು ಮಾಡಿದ್ದಾನೆ. ಹೆಂಗಸು
ಗಂಡಸನ್ನು ಕಾಪಾಡುವಳು.''

23 ಇಸ್ರೇಲಿನ ದೇವರು ಸರ್ವಶಕ್ತನಾದ ಯೆಹೋವನು
ಇಂತೆನ್ನುತ್ತಾನೆ: ''ನಾನು ಯೆಹೂದದ ಜನರಿಗಾಗಿ ಮತ್ತೆ
ಒಳ್ಳೆಯದನ್ನು ಮಾಡುವೆನು. ಸೆರೆಯಾಳುಗಳಾಗಿ ಒಯ್ಯ
ಲ್ಪಟ್ಟಿದ್ದವರನ್ನು ನಾನು ಮತ್ತೆ ಕರೆದುತರುವೆನು. ಆಗ
ಅವರು ಯೆಹೂದನಾಡಿನಲ್ಲಿಯೂ ಅದರ ನಗರಗಳ
ಲ್ಲಿಯೂ ಇಂತೆನ್ನುವರು: 'ನ್ಯಾಯವಾದ ನಿವಾಸವೇ.
ಪವಿತ್ರ ಪರ್ವತವೇ ದೇವರು ನಿನ್ನನ್ನು ಆಶೀರ್ವದಿಸಲಿ.'
24 ''ಯೆಹೂದದ ಎಲ್ಲಾ ಊರುಗಳಲ್ಲಿ ಜನರು ಪರಸ್ಪರ
ಶಾಂತಿಯಿಂದ ವಾಸಿಸುವರು. ರೈತರೂ ದನಕುರಿಗಳನ್ನು
ಮೇಯಿಸುವ ಜನರೂ ಶಾಂತಿಯಿಂದ ಯೆಹೂದದಲ್ಲಿ
ವಾಸಿಸುವರು. 25 ದುರ್ಬಲಗೊಂಡ ಮತ್ತು ದಣಿದ
ಜನರಿಗೆ ನಾನು ಶಕ್ತಿಯನ್ನೂ ವಿಶ್ರಾಂತಿಯನ್ನೂ
ಕೊಡುವೆನು.''

26 ಆಗ ನಾನು ಎಚ್ಚೆತ್ತು ಸುತ್ತಮುತ್ತಲು ನೋಡಿದೆ.
ಅದೊಂದು ಬಹಳ ಹಿತಕರವಾದ ನಿದ್ರೆಯಾಗಿತ್ತು.
27 ಯೆಹೋವನು ಹೀಗೆ ನುಡಿದನು. ''ಇಸ್ರೇಲ್ ಮತ್ತು
ಯೆಹೂದ ವಂಶಗಳು ಬೆಳೆಯುವದಕ್ಕೆ ನಾನು ಸಹಾಯ
ಮಾಡುವ ದಿನಗಳು ಬರುತ್ತಿವೆ. ಸಸಿಗಳನ್ನು ನೆಟ್ಟ ಮೇಲೆ
ಅವುಗಳನ್ನು ನೋಡಿಕೊಳ್ಳುವ ಹಾಗೆ ಅವರ ಮಕ್ಕಳು
ಮತ್ತು ಅವರ ಪಶುಗಳು ಬೆಳೆಯುವದಕ್ಕೂ ನಾನು
ಸಹಾಯ ಮಾಡುತ್ತೇನೆ. 28 ಪೂರ್ವಕಾಲದಲ್ಲಿ, ಇಸ್ರೇಲ್
ಮತ್ತು ಯೆಹೂದಗಳ ಮೇಲೆ ನಾನು ಗಮನವಿಟ್ಟಿದ್ದೇನು.
ಆದರೆ ನಾನು ಅವರನ್ನು ತೆಗೆದುಹಾಕುವ ಸಮಯಕ್ಕಾಗಿ
ಕಾದುಕೊಂಡಿದ್ದೆ. ನಾನು ಅವರನ್ನು ಕೆಡವಿದೆ; ಅವರನ್ನು
ಹಾಳುಮಾಡಿದೆ. ಅವರಿಗೆ ಅನೇಕ ಕಷ್ಟಗಳನ್ನು ಕೊಟ್ಟೆ.
ಆದರೆ ಈಗ ಅವರನ್ನು ಅಭಿವೃದ್ಧಿ ಪಡಿಸುವದಕ್ಕಾಗಿ
ಅವರನ್ನು ಬಲಶಾಲಿಗಳನ್ನಾಗಿ ಮಾಡಲು ಅವರ ಕಡೆಗೆ
ಗಮನಹರಿಸುತ್ತೇನೆ'' ಇದು ಯೆಹೋವನ ನುಡಿ.

29 ''ಹುಳಿ ದಾಕ್ಷಿ ತಿಂದವರು ತಂದೆತಾಯಿಗಳು! ರುಚಿ
ಕಂಡದ್ದು ಅವರ ಮಕ್ಕಳು!

ಎಂಬ ಗಾದೆಯನ್ನು ಆಗ ಬಳಸುವ ಅವಶ್ಯಕತೆ ಇರುವ
ದಿಲ್ಲ. 30 ಪ್ರತಿಯೊಬ್ಬನು ತನ್ನ ಪಾಪದ ನಿಮಿತ್ತವೇ ಸಾಯು
ವನು. ಹುಳಿ ದಾಕ್ಷಿಯನ್ನು ತಿಂದವನೇ ಅದರ ರುಚಿ
ಯನ್ನು ಕಾಣುವನು.''

### ಹೊಸ ಒಡಂಬಡಿಕೆ

31 ಯೆಹೋವನು ಹೀಗೆಂದನು: ''ನಾನು ಇಸ್ರೇಲ
ರೊಂದಿಗೂ ಮತ್ತು ಯೆಹೂದ್ಯರೊಂದಿಗೂ ಒಂದು
ಹೊಸ ಒಡಂಬಡಿಕೆಯನ್ನು ಮಾಡಿಕೊಳ್ಳುವ ಸಮಯ
ಬರುತ್ತಿದೆ. 32 ಈ ಒಡಂಬಡಿಕೆ ನಾನು ಅವರ ಪೂರ್ವಿಕ
ರೊಂದಿಗೆ ಮಾಡಿಕೊಂಡ ಒಡಂಬಡಿಕೆಯಂತಲ್ಲ. ನಾನು
ಅವರ ಕೈಹಿಡಿದು ಈಜಿಪ್ಟಿನಿಂದ ಹೊರತಂದಾಗ ಮಾಡಿ
ಕೊಂಡ ಒಡಂಬಡಿಕೆಯದು. ನಾನು ಅವರ ಒಡೆಯ
ನಾಗಿದ್ದೆ. ಆದರೆ ಅವರು ಒಡಂಬಡಿಕೆಯನ್ನು ಮುರಿ
ದರು.'' ಇದು ಯೆಹೋವನ ನುಡಿ.
33 ಯೆಹೋವನು ಇಂತೆನ್ನುತ್ತಾನೆ: ''ಭವಿಷ್ಯದಲ್ಲಿ
ಇಸ್ರೇಲಿನ ಜನರೊಂದಿಗೆ ನಾನು ಈ ಒಡಂಬಡಿಕೆಯನ್ನು
ಮಾಡಿಕೊಳ್ಳುತ್ತೇನೆ. ನಾನು ನನ್ನ ಉಪದೇಶವನ್ನು ಅವರ
ಅಂತರಂಗದಲ್ಲಿ ಇಡುವೆನು; ಅವುಗಳನ್ನು ಅವರ ಹೃದಯ
ಗಳ ಮೇಲೆ ಬರೆಯುವನು. ನಾನು ಅವರ ದೇವ
ರಾಗಿರುವೆನು, ಅವರು ನನ್ನ ಜನರಾಗಿರುವರು. 34 ತಮ್ಮ
ನೆರೆಮನೆಯವರಿಗೂ ತಮ್ಮ ಬಂಧುಬಳಗದವರಿಗೂ

ಯಾರೂ ಯೆಹೋವನ ಬಗ್ಗೆ ಹೇಳಿಕೊಡಬೇಕಾಗಿಲ್ಲ.
ಯಾಕಂದರೆ ಅತಿ ಕನಿಷ್ಠರಿಂದ ಅತಿ ಗರಿಷ್ಠರವರೆಗೆ
ಎಲ್ಲರೂ ನನ್ನನ್ನು ತಿಳಿದುಕೊಂಡಿರುವರು. ಅವರು
ಮಾಡಿದ ದುಷ್ಕೃತ್ಯಗಳಿಗಾಗಿ ನಾನು ಅವರನ್ನು ಕ್ಷಮಿಸು
ವೆನು. ನಾನು ಅವರ ಪಾಪಗಳನ್ನು ಮರೆತು ಬಿಡುವೆನು.’’
ಇದು ಯೆಹೋವನ ನುಡಿ.

## ಯೆಹೋವನು ಇಸ್ರೇಲನ್ನು ಎಂದಿಗೂ ತ್ಯಜಿಸನು

35 ಯೆಹೋವನು ಇಂತೆನ್ನುತ್ತಾನೆ: ‘‘ಹಗಲಿನಲ್ಲಿ
ಸೂರ್ಯನು ಪ್ರಕಾಶಿಸುವಂತೆ ಮಾಡುವಾತನೂ
ರಾತ್ರಿಯಲ್ಲಿ ಚಂದ್ರನೂ ನಕ್ಷತ್ರಗಳೂ ಪ್ರಕಾಶಿಸು
ವಂತೆ ಮಾಡುವಾತನೂ ಸಮುದ್ರದ ಅಲೆಗಳು
ದಡಕ್ಕೆ ಅಪ್ಪಳಿಸುವಂತೆ ಸಮುದ್ರವನ್ನು ಕೆರಳಿಸು
ವಾತನೂ. ಸರ್ವಶಕ್ತನಾದ ಯೆಹೋವನೆಂಬ
ಹೆಸರಿನಿಂದ ಪ್ರಖ್ಯಾತನೂ ಆಗಿರುವ
ಯೆಹೋವನು.’’
36 ಯೆಹೋವನು ಇಂತೆನ್ನುತ್ತಾನೆ: ‘‘ಸೂರ್ಯ,
ಚಂದ್ರ, ನಕ್ಷತ್ರ ಮತ್ತು ಸಮುದ್ರಗಳ ಮೇಲಿನ
ಹತೋಟಿಯನ್ನು ನಾನು ಕಳೆದುಕೊಂಡಾಗ
ಮಾತ್ರ ಇಸ್ರೇಲಿನ ಪೀಳಿಗೆಯು ಒಂದು ಜನಾಂಗ
ವಾಗಿ ನಿಂತು ಹೋಗುವುದು.’’
37 ಯೆಹೋವನು ಇಂತೆನ್ನುತ್ತಾನೆ: ‘‘ನಾನು ಇಸ್ರೇಲ್
ಸಂತತಿಯವರನ್ನು ತಿರಸ್ಕರಿಸುವುದೇ ಇಲ್ಲ. ಜನ
ರಿಗೆ ಆಕಾಶಮಂಡಲವನ್ನು ಅಳೆಯಲೂ ಭೂಗ
ರ್ಭದ ಪರಿಪೂರ್ಣ ರಹಸ್ಯವನ್ನು ಅರಿಯಲೂ
ಸಾಧ್ಯವೇ? ಒಂದು ವೇಳೆ ಸಾಧ್ಯವಾದರೆ, ಇಸ್ರೇ
ಲರು ಮಾಡಿದ ದುಷ್ಕೃತ್ಯಗಳಿಗಾಗಿ ನಾನೂ ಇಸ್ರೇಲ
ರನ್ನು ನಿರಾಕರಿಸಿದರೂ ನಿರಾಕರಿಸಬಹುದು.’’
ಇದು ಯೆಹೋವನ ಸಂದೇಶ.

## ಹೊಸ ಜೆರುಸಲೇಮ್

[38]ಇದು ಯೆಹೋವನ ನುಡಿ: ‘‘ಯೆಹೋವನಿಗಾಗಿ
ಜೆರುಸಲೇಮ್ ನಗರವನ್ನು ಮತ್ತೆ ಕಟ್ಟುವ ಕಾಲ
ಬರುತ್ತಿದೆ. ಹನನೇಲನ ಬುರುಜಿನಿಂದ ಮೂಲೆಯ
ಬಾಗಿಲಿನವರೆಗೆ ಇಡೀ ಪಟ್ಟಣವನ್ನು ಮತ್ತೊಮ್ಮೆ ಕಟ್ಟ
ಲಾಗುವುದು. [39]ಅಳತೆಯ ನೂಲು ಮೂಲೆಯ ಬಾಗಿಲಿ
ನಿಂದ ಗಾರೇಬ್ ಗುಡ್ಡದ ನೇರವಾಗಿ ನೆಟ್ಟಗೆ ಎಳೆಯ
ಲ್ಪಟ್ಟು ಗೋಯದ ಕಡೆಗೆ ತಿರುಗುವುದು. [40]ಹೆಣಗಳನ್ನು
ಮತ್ತು ಬೂದಿಯನ್ನು ಚೆಲ್ಲುವ ಇಡೀ ಕಣಿವೆ ಪ್ರದೇಶ
ಯೆಹೋವನಿಗೆ ಪವಿತ್ರಸ್ಥಳವಾಗುವುದು. ಕಿದ್ರೋನ್
ಹಳ್ಳ, ಪೂರ್ವದಿಕ್ಕಿನ ಕುದುರೆಬಾಗಿಲಿನ ಮೂಲೆ, ಇವು
ಗಳವರೆಗಿರುವ ಬೆಟ್ಟಪ್ರದೇಶ ಅದರಲ್ಲಿ ಸೇರುವುದು. ಆ
ಪ್ರದೇಶವೆಲ್ಲ ಯೆಹೋವನಿಗೆ ಪವಿತ್ರಸ್ಥಳವಾಗುವುದು.
ಜೆರುಸಲೇಮ್ ನಗರವು ಇನ್ನು ಮೇಲೆ ಎಂದಿಗೂ
ಕೆಡವಲ್ಪಡದು ; ಹಾಳಾಗದು!’’

## ಯೆರೆಮೀಯನು ಹೊಲವನ್ನು ಕೊಂಡದ್ದು

32 ಯೆಹೂದದ ರಾಜನಾದ ಚಿದ್ಕೀಯನ ಆಳ್ವಿ
ಕೆಯ ಹತ್ತನೆಯ ವರ್ಷದಲ್ಲಿ* ಯೆರೆಮೀಯ
ನಿಗೆ ಯೆಹೋವನಿಂದ ಬಂದ ಸಂದೇಶವಿದು.
ಚಿದ್ಕೀಯನ ಆಳ್ವಿಕೆಯ ಹತ್ತನೆಯ ವರ್ಷ ನೆಬೂಕದ್ನೆಚ್ಚ
ರನ ಆಳ್ವಿಕೆಯ ಹದಿನೆಂಟನೇ ವರ್ಷವಾಗಿತ್ತು. [2]ಆ
ಸಮಯದಲ್ಲಿ ಬಾಬಿಲೋನಿನ ರಾಜನ ಸೈನ್ಯವು ಜೆರುಸ
ಲೇಮನ್ನು ಮುತ್ತಿತ್ತು. ಯೆರೆಮೀಯನು ಕಾರಾಗೃಹದ
ಅಂಗಳದಲ್ಲಿ ಸೆರೆಯಾಗಿದ್ದನು. ಈ ಕಾರಾಗೃಹವು ಯೆಹೂ
ದದ ರಾಜನ ಅರಮನೆಗೆ ಸೇರಿತ್ತು. [3](ಯೆಹೂದದ
ರಾಜನಾದ ಚಿದ್ಕೀಯನು ಯೆರೆಮೀಯನನ್ನು ಆ ಕಾರಾ
ಗೃಹದಲ್ಲಿಟ್ಟಿದ್ದನು. ಯೆರೆಮೀಯನು ಪ್ರವಾದಿಸಿದ
ವಿಷಯಗಳನ್ನು ಚಿದ್ಕೀಯನು ಮೆಚ್ಚಿಕೊಂಡಿರಲಿಲ್ಲ.
ಯೆರೆಮೀಯನು ಹೇಳಿದ್ದೇನೆಂದರೆ: ‘‘ಯೆಹೋವನು
ಇಂತೆನ್ನುತ್ತಾನೆ: ‘ನಾನು ತಕ್ಷಣವೇ ಜೆರುಸಲೇಮ್ ನಗರ
ವನ್ನು ಬಾಬಿಲೋನಿನ ರಾಜನಿಗೆ ಒಪ್ಪಿಸುತ್ತೇನೆ.
ನೆಬೂಕದ್ನೆಚ್ಚರನು ಈ ನಗರವನ್ನು ಸ್ವಾಧೀನ ಪಡಿಸಿ
ಕೊಳ್ಳುವನು. [4]ಯೆಹೂದದ ರಾಜನಾದ ಚಿದ್ಕೀಯನು
ಬಾಬಿಲೋನಿನ ಸೈನಿಕರಿಂದ ತಪ್ಪಿಸಿಕೊಳ್ಳಲಾರ. ಖಂಡಿತ
ವಾಗಿಯೂ ಅವನನ್ನು ಬಾಬಿಲೋನಿನ ರಾಜನಿಗೆ ಒಪ್ಪಿಸ
ಲಾಗುವುದು. ಚಿದ್ಕೀಯನು ಮುಖಾಮುಖಿಯಾಗಿ
ಬಾಬಿಲೋನಿನ ರಾಜನೊಂದಿಗೆ ಮಾತನಾಡುವನು.
ಚಿದ್ಕೀಯನು ತನ್ನ ಕಣ್ಣುಗಳಿಂದ ಅವನನ್ನು ನೋಡು
ವನು. [5]ಬಾಬಿಲೋನಿನ ರಾಜನು ಚಿದ್ಕೀಯನನ್ನು ಬಾಬಿ
ಲೋನಿಗೆ ತೆಗೆದುಕೊಂಡು ಹೋಗುವನು. ನಾನು ಅವ
ನನ್ನು ದಂಡಿಸುವವರೆಗೆ ಚಿದ್ಕೀಯನು ಅಲ್ಲಿರುವನು.
ನೀವು ಕಸ್ದೀಯರೊಡನೆ ಯುದ್ಧ ಮಾಡಿದರೂ ನಿಮಗೆ
ಜಯವಾಗದು ’’’ ಇದು ಯೆಹೋವನ ನುಡಿ.
[6]ಸೆರೆಯಲ್ಲಿದ್ದಾಗ ಯೆರೆಮೀಯನು ಹೇಳಿದನು,
‘‘ನನಗೆ ಯೆಹೋವನಿಂದ ಒಂದು ಸಂದೇಶ ಬಂದಿದೆ.
ಅದು ಹೀಗಿದೆ: [7]ಯೆರೆಮೀಯನೇ, ನಿನ್ನ ಚಿಕ್ಕಪ್ಪನಾದ
ಶಲ್ಲೂಮನ ಮಗನಾಗಿರುವ ಹನಮೇಲನು ಶೀಘ್ರದಲ್ಲಿ
ನಿನ್ನ ಬಳಿಗೆ ಬಂದು, ‘ಯೆರೆಮೀಯನೇ ಅನಾತೋತ್
ಪಟ್ಟಣದ ಬಳಿಯಲ್ಲಿರುವ ನನ್ನ ಹೊಲವನ್ನು
ಕೊಂಡುಕೋ. ನೀನು ನನ್ನ ಅತಿ ಸಮೀಪದ ಬಂಧು

---

**ಚಿದ್ಕೀಯನ ಆಳ್ವಿಕೆಯ ಹತ್ತನೆಯ ವರ್ಷ** ಅಂದರೆ ಕ್ರಿ. ಪೂ. 588- 587 ನೆಬೂಕದ್ನೆಚ್ಚರನು ಜೆರುಸಲೇಮನ್ನು ನಾಶಮಾಡಿದ್ದು ಈ ವರ್ಷದಲ್ಲಿಯೇ.

ವಾದುದರಿಂದ ಅದನ್ನು ಕೊಂಡುಕೋ. ಆ ಹೊಲವನ್ನು
ಕೊಂಡುಕೊಳ್ಳಲು ನಿನಗೆ ಅಧಿಕಾರವಿದೆ ಮತ್ತು ಅದು
ನಿನ್ನ ಹೊಣೆಗಾರಿಕೆಯೂ ಹೌದು, ಎಂದು ಹೇಳುವನು.
8‘‘ಆಮೇಲೆ ಯೆಹೋವನು ಹೇಳಿದಂತೆಯೇ
ಆಯಿತು. ನನ್ನ ಚಿಕ್ಕಪ್ಪನ ಮಗನಾದ ಹನಮೇಲನು ಕಾರಾ
ಗೃಹದ ಅಂಗಳದಲ್ಲಿದ್ದ ನನ್ನ ಬಳಿಗೆ ಬಂದು ಹೀಗೆ ಹೇಳಿ
ದನು: ‘ಯೆರೆಮೀಯನೇ, ಬೆನ್ಯಾಮೀನ್ ಸೀಮೆಯ
ಅನಾತೋತಿನಲ್ಲಿರುವ ನನ್ನ ಹೊಲವನ್ನು ಕೊಂಡುಕೋ.
ಆ ಹೊಲವನ್ನು ನಿನಗಾಗಿ ಕೊಂಡುಕೋ. ಅದರ
ಒಡೆಯನಾಗುವದಕ್ಕೆ ನಿನಗೆ ಹಕ್ಕಿದೆ.’

‘‘ಇದು ಯೆಹೋವನ ಸಂದೇಶವೆಂದು ನನಗೆ ತಿಳಿ
ಯಿತು. 9ನಾನು ನನ್ನ ಚಿಕ್ಕಪ್ಪನ ಮಗನಾದ ಹನಮೇಲ
ನಿಂದ ಅನಾತೋತಿನಲ್ಲಿರುವ ಹೊಲವನ್ನು ಕೊಂಡು
ಅದರ ಕ್ರಯವಾಗಿ ಹದಿನೇಳು ಶೆಕೆಲ್* ಬೆಳ್ಳಿಯನ್ನು
ತೂಕ ಹಾಕಿದೆನು. 10ನಾನು ಕ್ರಯಪತ್ರಕ್ಕೆ ಸಹಿ ಹಾಕಿದೆನು.
ಕ್ರಯಪತ್ರದ ಒಂದು ಪ್ರತಿಗೆ ರುಜು ಮಾಡಿಸಿದೆನು. ಇದಕ್ಕೆ
ಸಾಕ್ಷಿಯಾಗಿ ಕೆಲಜನರನ್ನು ಕರೆಸಿದೆನು. ನಾನು
ಬೆಳ್ಳಿಯನ್ನು ತಕ್ಕಡಿಯಲ್ಲಿ ತೂಕಹಾಕಿಕೊಟ್ಟೆನು.
11ಆಮೇಲೆ ಕ್ರಯಪತ್ರದ ರುಜು ಮಾಡಿದ ಒಂದು ಪ್ರತಿ
ಯನ್ನು ಮತ್ತು ರುಜು ಮಾಡದ ಒಂದು ಪ್ರತಿಯನ್ನು
ತೆಗೆದುಕೊಂಡೆನು. 12ನಾನು ಅವುಗಳನ್ನು ಬಾರೂಕನ
ಕೈಗೆ ಕೊಟ್ಟೆನು. ಬಾರೂಕನು ನೇರೀಯನ ಮಗ
ನಾಗಿದ್ದನು.

ನೇರೀಯನು ಮಹ್ಸೇಮನ ಮಗನಾಗಿದ್ದನು.
ಮೊಹರು ಮಾಡಿದ ಕ್ರಯಪತ್ರದಲ್ಲಿ ನಾನು ಹೊಲವನ್ನು
ಕ್ರಯಕ್ಕೆ ಕೊಂಡ ಎಲ್ಲಾ ಷರತ್ತುಗಳಿದ್ದವು. ನನ್ನ ಚಿಕ್ಕಪ್ಪನ
ಮಗನಾದ ಹನಮೇಲನು ಮತ್ತು ಉಳಿದ ಸಾಕ್ಷಿಗಳು
ಅಲ್ಲಿದ್ದಾಗಲೇ ನಾನು ಈ ಕ್ರಯಪತ್ರವನ್ನು ಬಾರೂಕನ
ಕೈಗೆ ಕೊಟ್ಟೆನು. ಆ ಸಾಕ್ಷಿಗಳು ಸಹ ಈ ಕ್ರಯಪತ್ರಕ್ಕೆ ಸಹಿ
ಹಾಕಿದ್ದರು. ಆ ಅಂಗಳದಲ್ಲಿ ಕುಳಿತ ಹಲವಾರು ಜನ
ಯೆಹೂದ್ಯರು ನಾನು ಬಾರೂಕನ ಕೈಗೆ ಆ ಕ್ರಯಪತ್ರ
ಕೊಡುವದನ್ನು ನೋಡಿದರು.

13‘‘ಎಲ್ಲಾ ಜನರು ನೋಡುತ್ತಿದ್ದಂತೆಯೆ ನಾನು
ಬಾರೂಕನಿಗೆ, 14‘ಸರ್ವಶಕ್ತನೂ ಇಸ್ರೇಲಿನ ದೇವರೂ
ಆಗಿರುವ ಯೆಹೋವನು ಇಂತೆನ್ನುತ್ತಾನೆ: ‘ಕ್ರಯಪತ್ರದ
ಎರಡೂ ಪ್ರತಿಗಳನ್ನು ಅಂದರೆ ರುಜು ಮಾಡಿದ ಮತ್ತು
ರುಜು ಮಾಡದ ಪ್ರತಿಗಳನ್ನು ತೆಗೆದುಕೊಂಡು ಅವುಗಳು
ಬಹುಕಾಲ ಉಳಿಯುವಂತೆ ಒಂದು ಮಣ್ಣಿನ ಪಾತ್ರೆಯಲ್ಲಿ
ಹಾಕಿ ಮುಚ್ಚಿಡು. 15ಇಸ್ರೇಲಿನ ದೇವರೂ ಸರ್ವಶಕ್ತನೂ
ಆಗಿರುವ ಯೆಹೋವನು, ‘‘ಮುಂದಿನಕಾಲದಲ್ಲಿ
ಇಸ್ರೇಲ್ ದೇಶದಲ್ಲಿ ನನ್ನ ಜನರು ಪುನಃ ಮನೆಗಳನ್ನು,
ಹೊಲಗಳನ್ನು, ದ್ರಾಕ್ಷಿತೋಟಗಳನ್ನು ಕೊಂಡುಕೊಳ್ಳು
ವರು’ ಎಂದು ಅನ್ನುತ್ತಾನೆ.’’’

16‘‘ನೇರೀಯನ ಮಗನಾದ ಬಾರೂಕನಿಗೆ ಕ್ರಯಪತ್ರ
ವನ್ನು ಕೊಟ್ಟ ಮೇಲೆ ನಾನು ಯೆಹೋವನಿಗೆ ಪ್ರಾರ್ಥಿಸಿ
ಹೀಗೆಂದೆನು:

17‘‘ದೇವರಾದ ಯೆಹೋವನೇ, ನೀನು ಆಕಾಶ
ವನ್ನೂ ಭೂಮಂಡಲವನ್ನೂ ಸೃಷ್ಟಿಸಿದೆ. ಅವುಗ
ಳನ್ನು ನೀನು ನಿನ್ನ ಅಪಾರವಾದ ಶಕ್ತಿಯಿಂದ ಸೃಷ್ಟಿ
ಸಿದೆ. ನಿನಗೆ ಅಸಾಧ್ಯವಾದುದು ಯಾವುದೂ ಇಲ್ಲ.
18ಯೆಹೋವನೇ, ನೀನು ಸಾವಿರಾರು ಜನರಿಗೆ
ನಂಬಿಗಸ್ತನಾಗಿಯೂ ಕರುಣಾಮಯಿಯಾ
ಗಿಯೂ ಇರುವೆ. ಆದರೆ ತಂದೆಗಳು ಮಾಡಿದ
ಪಾಪಕ್ಕಾಗಿ ಮಕ್ಕಳಿಗೆ ಶಿಕ್ಷೆಯನ್ನು ವಿಧಿಸುವಾತನೂ
ನೀನೇ. ಮಹತ್ವವುಳ್ಳವನೇ ಪರಾಕ್ರಮಿಯಾದ
ದೇವರೇ, ಸರ್ವಶಕ್ತನಾದ ಯೆಹೋವನು
ಎಂಬುದೇ ನಿನ್ನ ನಾಮಧೇಯ. 19ನೀನು
ಮಹತ್ತರವಾದ ಯೋಜನೆಗಳನ್ನು ಹಾಕಿ ಮಹತ್ಕಾ
ರ್ಯಗಳನ್ನು ಮಾಡುವೆ. ಜನರು ಮಾಡುವ ಎಲ್ಲ
ವನ್ನೂ ನೀನು ನೋಡುವೆ. ಒಳ್ಳೆಯದನ್ನು ಮಾಡು
ವವರಿಗೆ ನೀನು ಪ್ರತಿಫಲಗಳನ್ನು ಕೊಡುವೆ.
ಕೆಟ್ಟದ್ದನ್ನು ಮಾಡುವವರನ್ನು ನೀನು ದಂಡಿಸುವೆ.
ಅವರು ಯಾವುದಕ್ಕೆ ಅರ್ಹರೊ ಅದನ್ನು
ಕೊಡುವೆ. 20ಯೆಹೋವನೇ, ನೀನು ಈಜಿಪ್ಟ್
ದೇಶದಲ್ಲಿ ಅದ್ಭುತಕಾರ್ಯಗಳನ್ನು ಮಾಡಿದೆ.
ಇಂದಿನವರೆಗೂ ನೀನು ಅದ್ಭುತಕಾರ್ಯಗಳನ್ನು
ಮಾಡಿದೆ. ಇಸ್ರೇಲಿನಲ್ಲಿಯೂ ನೀನು ಅವುಗಳನ್ನು
ಮಾಡಿದೆ. ಜನರು ಇರುವಲ್ಲೆಲ್ಲ ನೀನು ಅವು
ಗಳನ್ನು ಮಾಡಿದೆ. ಇವುಗಳಿಂದ ನೀನು ಸುಪ್ರಸಿದ್ಧ
ನಾಗಿರುವೆ. 21ಯೆಹೋವನೇ, ನೀನು ಅದ್ಭುತ
ಕಾರ್ಯಗಳನ್ನು ಮಾಡಿ ನಿನ್ನ ಜನರನ್ನು ಈಜಿಪ್ಟಿ
ನಿಂದ ಇಸ್ರೇಲಿಗೆ ಕರೆದುತಂದೆ. ಇದನ್ನು ಬಲವಾದ
ಕೈಗಳಿಂದಲೇ ಮಾಡಿದೆ. ನಿನ್ನ ಸಾಮರ್ಥ್ಯ
ಆಶ್ಚರ್ಯಕರವಾದದು.

22‘‘ಯೆಹೋವನೇ, ನೀನು ಈ ಭೂಮಿಯನ್ನು
ಇಸ್ರೇಲರಿಗೆ ಕೊಟ್ಟೆ. ನೀನು ಬಹಳಕಾಲದ
ಹಿಂದೆಯೇ ಈ ಭೂಮಿಯನ್ನು ಅವರ ಪೂರ್ವಿಕ
ರಿಗೆ ಕೊಡುವದಾಗಿ ಮಾತುಕೊಟ್ಟಿದ್ದೆ. ಇದು
ಬಹಳ ಒಳ್ಳೆಯ ಭೂಮಿ. ಇದು ಅನೇಕ ಒಳ್ಳೆವಸ್ತು
ಗಳನ್ನು ಹೊಂದಿರುವ ಒಳ್ಳೆಯ ಭೂಮಿ.*
23ಇಸ್ರೇಲಿನ ಜನರು ಈ ಪ್ರದೇಶಕ್ಕೆ ಬಂದು

**ಶೆಕಲ್** 2: 5 ಔನ್ಸ್ (ತೂಕ)

**ಇದು … ಭೂಮಿ** ಅಕ್ಷರಶಃ ಹಾಲು ಮತ್ತು ಜೇನು ಹರಿಯುವ ದೇಶ.

ಅದನ್ನು ತಮ್ಮದ್ದನ್ನಾಗಿ ಮಾಡಿಕೊಂಡರು. ಆದರೆ
ಅವರು ನಿನ್ನ ಆಜ್ಞೆಯನ್ನು ಪಾಲಿಸಲಿಲ್ಲ; ನಿನ್ನ ಉಪ
ದೇಶಗಳನ್ನು ಅನುಸರಿಸಲಿಲ್ಲ; ನಿನ್ನ ಆಜ್ಞೆಯಂತೆ
ಮಾಡಲಿಲ್ಲ. ಆದುದರಿಂದ ನೀನು ಇಸ್ರೇಲರಿಗೆ
ಇಂಥಾ ದುರ್ಗತಿ ಬರುವಂತೆ ಮಾಡಿದೆ.

24‘‘ಈಗ ವೈರಿಗಳು ನಗರವನ್ನು ಮುತ್ತಿದ್ದಾರೆ.
ಜೆರುಸಲೇಮಿನ ಗೋಡೆಯನ್ನು ಹತ್ತಿ ಅದನ್ನು
ಸ್ವಾಧೀನಪಡಿಸಿಕೊಳ್ಳುವದಕ್ಕಾಗಿ ಅವರು ಇಳಿ
ಜಾರುಗೋಡೆಗಳನ್ನು ಕಟ್ಟುತ್ತಿದ್ದಾರೆ. ಬಾಬಿಲೋ
ನಿನ ಸೈನಿಕರು ತಮ್ಮ ಖಡ್ಗ, ಕ್ಷಾಮ ಮತ್ತು
ಭಯಂಕರ ವ್ಯಾಧಿ ಇವುಗಳ ಸಹಾಯದಿಂದ
ಜೆರುಸಲೇಮ್ ನಗರವನ್ನು ಸ್ವಾಧೀನ ಪಡಿಸಿ
ಕೊಳ್ಳುವರು. ಬಾಬಿಲೋನಿನ ಸೈನಿಕರು ಈಗ
ನಗರದ ಮೇಲೆ ಧಾಳಿ ಮಾಡುತ್ತಿದ್ದಾರೆ. ಯೆಹೋ
ವನೇ, ಹೀಗಾಗುವದೆಂದು ನೀನು ಹೇಳಿದ್ದೆ, ಈಗ
ನೀನು ಹೇಳಿದಂತೆಯೇ ಆಗುತ್ತಿದೆ.

25‘‘ನನ್ನ ಒಡೆಯನಾದ ಯೆಹೋವನೇ, ಆ
ದುರ್ಘಟನೆಗಳೆಲ್ಲಾ ಸಂಭವಿಸುತ್ತಿವೆ. ಆದರೆ ಈಗ
ನೀನು ‘ಯೆರೆಮೀಯನೇ, ಬೆಳ್ಳಿಯನ್ನು ಕೊಟ್ಟು
ಹೊಲವನ್ನು ಕೊಂಡುಕೋ ಮತ್ತು ಈ ಖರೀದಿಗೆ
ಸಾಕ್ಷಿಯಾಗಿ ಕೆಲವು ಜನರನ್ನು ಆರಿಸಿಕೋ, ಎಂದು
ಹೇಳುತ್ತಿರುವಿಯಲ್ಲ. ಬಾಬಿಲೋನಿನ ಸೈನ್ಯವು
ನಗರವನ್ನು ಸ್ವಾಧೀನಪಡಿಸಿಕೊಳ್ಳಲು ಸಿದ್ಧವಾಗಿ
ನಿಂತಿರುವಾಗ ನೀನು ಇದನ್ನು ಹೇಳುತ್ತಿರುವಿ
ಯಲ್ಲ, ಏಕೆ? ಏಕೆ ನಾನು ಹಣವನ್ನು ಹೀಗೆ ವ್ಯರ್ಥ
ವಾಗಿ ಕಳೆದುಕೊಳ್ಳಬೇಕು?’’

26ಆಗ ಯೆರೆಮೀಯನಿಗೆ ಯೆಹೋವನಿಂದ ಈ
ಸಂದೇಶ ಬಂದಿತು: 27‘‘ಯೆರೆಮೀಯನೇ, ನಾನೇ
ಯೆಹೋವನು, ನಾನು ಈ ಭೂಮಂಡಲದ ಪ್ರತಿಯೊ
ಬ್ಬನ ದೇವರು. ಯೆರೆಮೀಯನೆ, ನನಗೆ ಯಾವುದೂ
ಅಸಾಧ್ಯವಲ್ಲವೆಂಬುದನ್ನು ನೀನು ಬಲ್ಲೆ.’’ 28ಯೆಹೋ
ವನು ಇಂತೆಂದನು: ‘‘ಜೆರುಸಲೇಮ್ ನಗರವನ್ನು ನಾನು
ಕೂಡಲೇ ಬಾಬಿಲೋನಿನ ಸೈನ್ಯಕ್ಕೂ ಬಾಬಿಲೋನಿನ
ರಾಜನಾದ ನೆಬೂಕದ್ನೆಚ್ಚರನಿಗೂ ಒಪ್ಪಿಸುವೆನು. ಸೈನ್ಯವು
ಈ ನಗರವನ್ನು ವಶಪಡಿಸಿಕೊಳ್ಳುವುದು. 29ಬಾಬಿಲೋ
ನಿನ ಸೈನ್ಯವು ಈಗಾಗಲೇ ಜೆರುಸಲೇಮ್ ನಗರದ ಮೇಲೆ
ಧಾಳಿ ಮಾಡುತ್ತಿದೆ. ಸೈನಿಕರು ಬೇಗನೆ ನಗರವನ್ನು ಪ್ರವೇ
ಶಿಸಿ ಅದಕ್ಕೆ ಬೆಂಕಿಹಚ್ಚಿ ಸುಟ್ಟುಹಾಕುವರು. ಜೆರುಸಲೇ
ಮಿನ ಜನರು ತಮ್ಮ ಮನೆಯ ಮಾಳಿಗೆಯ ಮೇಲೆ ಸುಳ್ಳು
ದೇವರಾದ ಬಾಳನಿಗೆ ನೈವೇದ್ಯವನ್ನು ಅರ್ಪಿಸಿ ನಾನು
ಕೋಪಿಸಿಕೊಳ್ಳುವಂತೆ ಮಾಡಿದ ಕೆಲವು ಮನೆಗಳು ಈ
ನಗರದಲ್ಲಿವೆ. ಅದಲ್ಲದೆ ಕೆಲವು ಜನರು ಅನ್ಯದೇವತೆ
ಗಳಿಗೆ ಪಾನನೈವೇದ್ಯವನ್ನು ಅರ್ಪಿಸಿರುವರು. ಬಾಬಿಲೋ
ನಿನ ಸೈನ್ಯವು ಆ ಮನೆಗಳನ್ನು ಸುಟ್ಟುಹಾಕುವುದು. 30ನಾನು
ಇಸ್ರೇಲಿನ ಜನರನ್ನು ಮತ್ತು ಯೆಹೂದದ ಜನರನ್ನು
ಗಮನಿಸಿದ್ದೇನೆ. ಅವರು ಮಾಡುವದೆಲ್ಲ ಕೆಟ್ಟದ್ದೆ. ಅವರು
ಚಿಕ್ಕಂದಿನಿಂದ ಕೆಟ್ಟದ್ದನ್ನೇ ಮಾಡಿದ್ದಾರೆ. ಇಸ್ರೇಲಿನ
ಜನರು ತಮ್ಮ ಕೈಗಳಿಂದ ಮಾಡಿದ ವಿಗ್ರಹಗಳನ್ನು ಪೂಜಿಸಿ
ನನಗೆ ಬಹು ಕೋಪ ಬರುವಂತೆ ಮಾಡಿದರು.’’ ಇದು
ಯೆಹೋವನ ನುಡಿ. 31‘‘ಜೆರುಸಲೇಮ್ ನಗರವು
ನಿರ್ಮಾಣಗೊಂಡಂದಿನಿಂದ ಇಂದಿನವರೆಗೂ ಈ ನಗ
ರದ ಜನರು ನನಗೆ ಕೋಪ ಬರುವಂತೆ ಮಾಡಿದ್ದಾರೆ.
ಈ ನಗರವು ನನಗೆ ಅತಿಕೋಪ ಬರುವಂತೆ ಮಾಡಿದೆ.
ಆದ್ದರಿಂದ ಕಣ್ಣಿಗೆ ಕಾಣದಂತೆ ಅದನ್ನು ಅಳಿಸಿಬಿಡುವೆನು.
32ಇಸ್ರೇಲಿನ ಮತ್ತು ಯೆಹೂದದ ಜನರು ಮಾಡಿದ ಎಲ್ಲಾ
ದುಷ್ಕೃತ್ಯಗಳಿಗಾಗಿ ನಾನು ಜೆರುಸಲೇಮ್ ನಗರವನ್ನು
ನಾಶಮಾಡುತ್ತೇನೆ. ಜನರು, ರಾಜರು, ಮುಂದಾಳು
ಗಳು, ಯಾಜಕರು, ಪ್ರವಾದಿಗಳು, ಯೆಹೂದದ ಪ್ರಜೆ
ಗಳು, ಜೆರುಸಲೇಮಿನ ನಿವಾಸಿಗಳು ಇವರೆಲ್ಲರೂ ನನಗೆ
ಕೋಪ ಬರುವಂತೆ ಮಾಡಿದ್ದಾರೆ.

33‘‘ಆ ಜನರು ಸಹಾಯಕೋರಿ ನನ್ನಲ್ಲಿಗೆ ಬರ
ಬೇಕಾಗಿತ್ತು. ಆದರೆ ಅವರು ನನಗೆ ವಿಮುಖರಾದರು.
ನಾನು ಮತ್ತೆಮತ್ತೆ ಅವರಿಗೆ ಬುದ್ಧಿಕಲಿಸುವ ಪ್ರಯತ್ನ
ಮಾಡಿದೆ. ಆದರೆ ಅವರು ನನ್ನ ಮಾತನ್ನು ಕೇಳಲಿಲ್ಲ.
ನಾನು ಅವರನ್ನು ತಿದ್ದುವ ಪ್ರಯತ್ನ ಮಾಡಿದೆ ಆದರೆ
ಅವರು ನನ್ನ ಮಾತನ್ನು ಕೇಳಲಿಲ್ಲ. 34ಆ ಜನರು ತಮಗಾಗಿ
ವಿಗ್ರಹಗಳನ್ನು ಮಾಡಿಕೊಂಡಿದ್ದಾರೆ. ನಾನು ಆ ವಿಗ್ರಹ
ಗಳನ್ನು ದ್ವೇಷಿಸುತ್ತೇನೆ. ನನ್ನ ಹೆಸರಿನಿಂದ ಖ್ಯಾತಿಗೊಂಡ
ಆಲಯದಲ್ಲಿ ಆ ವಿಗ್ರಹಗಳನ್ನಿಟ್ಟು ನನ್ನ ಆಲಯವನ್ನು
‘ಹೊಲಸು’ ಮಾಡಿದ್ದಾರೆ.

35ಬೆನ್‌ಹಿನ್ನೋಮ್ ಕಣಿವೆಯಲ್ಲಿ ಅವರು ಸುಳ್ಳು
ದೇವರಾದ ಬಾಳನಿಗಾಗಿ ಎತ್ತರವಾದ ಸ್ಥಳಗಳನ್ನು ಕಟ್ಟಿ
ದ್ದಾರೆ. ತಮ್ಮ ಮಕ್ಕಳನ್ನು ಆಹುತಿಕೊಡುವದಕ್ಕಾಗಿ ಈ
ಪೂಜಾ ಸ್ಥಳಗಳನ್ನು ಕಟ್ಟಿಸಿದ್ದಾರೆ. ಇಂಥಾ ಭಯಂಕರ
ವಾದ ಕೆಲಸವನ್ನು ಮಾಡಲು ನಾನು ಅವರಿಗೆ ಆಜ್ಞಾಪಿ
ಸಿಲ್ಲ. ಯೆಹೂದದ ಜನರು ಇಂಥಾ ಭಯಂಕರವಾದ
ಕಾರ್ಯವನ್ನು ಮಾಡುವರೆಂದು ನಾನೆಂದೂ
ಊಹಿಸಿರಲಿಲ್ಲ.

36‘‘‘ಬಾಬಿಲೋನಿನ ರಾಜನು ಜೆರುಸಲೇಮ್ ನಗರ
ವನ್ನು ಸ್ವಾಧೀನಪಡಿಸಿಕೊಳ್ಳುವನು. ಈ ಪಟ್ಟಣವನ್ನು
ವಶಪಡಿಸಿಕೊಳ್ಳಲು ಅವನು ಖಡ್ಗ,ಕ್ಷಾಮ, ಭಯಂಕರ
ವಾದ ವ್ಯಾಧಿಗಳನ್ನು ಬಳಸಿಕೊಳ್ಳುವನು’ ಎಂದು ನೀವು
ಹೇಳುತ್ತಿದ್ದೀರಿ. ಆದರೆ ಇಸ್ರೇಲರ ದೇವರಾದ

ಯೆಹೋವನು ಹೀಗೆ ಹೇಳುತ್ತಾನೆ: [37]‘ಇಸ್ರೇಲರನ್ನು
ಮತ್ತು ಯೆಹೂದ್ಯರನ್ನು ತಮ್ಮ ಪ್ರದೇಶವನ್ನು ಬಿಟ್ಟು
ಹೋಗಲು ನಾನು ಒತ್ತಾಯಿಸಿದ್ದೇನೆ. ನಾನು ಅವರ
ಮೇಲೆ ತುಂಬ ಕೋಪಗೊಂಡಿದ್ದೆ. ಆದರೆ ನಾನು ಅವ
ರನ್ನು ಈ ಸ್ಥಳಕ್ಕೆ ಹಿಂದಿರುಗಿಸುವೆನು. ನಾನು ಒತ್ತಾಯಿಸಿ
ಅವರನ್ನು ಅಟ್ಟಿದ ಸ್ಥಳಗಳಿಂದ ಅವರನ್ನು ಒಟ್ಟುಗೂಡಿಸು
ವೆನು. ಅವರನ್ನು ಪುನಃ ಈ ಸ್ಥಳಕ್ಕೆ ಕರೆತರುವೆನು. ಅವರು
ನೆಮ್ಮದಿಯಿಂದ ಮತ್ತು ಸುರಕ್ಷಿತವಾಗಿ ಇರುವಂತೆ ಮಾಡು
ವೆನು. [38]ಇಸ್ರೇಲರು ಮತ್ತು ಯೆಹೂದ್ಯರು ನನ್ನ ಭಕ್ತ
ರಾಗಿರುವರು, ನಾನು ಅವರ ದೇವರಾಗಿರುವೆನು.
[39]ಒಂದೇ ಜನಾಂಗವಾಗುವ ಬಯಕೆಯನ್ನು ನಾನು
ಅವರಲ್ಲಿ ಉಂಟುಮಾಡುವೆನು. ಅವರು ತಮ್ಮ ಜೀವ
ಮಾನವೆಲ್ಲಾ ನನ್ನನ್ನು ಆರಾಧಿಸಬೇಕೆಂಬ ಬಯಕೆಯನ್ನು
ಹೊಂದಿರುವರು. ಹೌದು, ಅವರ ಬಯಕೆಯೂ ಅವರ
ಮಕ್ಕಳ ಬಯಕೆಯೂ ಇದೇ ಆಗಿರುವುದು. [40]‘‘‘ನಾನು
ಇಸ್ರೇಲರ ಮತ್ತು ಯೆಹೂದ್ಯರ ಸಂಗಡ ಒಂದು ಒಡಂ
ಬಡಿಕೆಯನ್ನು ಮಾಡಿಕೊಳ್ಳುವೆನು. ಈ ಒಡಂಬಡಿಕೆಯು
ಶಾಶ್ವತವಾಗಿರುವುದು. ಈ ಒಡಂಬಡಿಕೆಗನುಸಾರವಾಗಿ
ನಾನು ಅವರಿಗೆ ವಿಮುಖನಾಗುವುದೇ ಇಲ್ಲ. ನಾನು
ಯಾವಾಗಲೂ ಅವರಿಗೆ ಒಳ್ಳೆಯವನಾಗಿರುತ್ತೇನೆ.
ನನ್ನನ್ನು ಗೌರವಿಸಬೇಕೆಂಬ ಇಚ್ಛೆಯನ್ನು ಅವರಲ್ಲಿ ಬರ
ಮಾಡುತ್ತೇನೆ. ಆಗ ಅವರೆಂದಿಗೂ ನನಗೆ ವಿಮುಖರಾಗು
ವದಿಲ್ಲ. [41]ಅವರು ನನ್ನನ್ನು ಸಂತೋಷಪಡಿಸುವರು.
ಅವರಿಗೆ ಒಳ್ಳೆಯದನ್ನು ಮಾಡುವದರಲ್ಲಿ ನಾನು
ಸಂತೋಷಪಡುವೆನು. ನಾನು ಖಂಡಿತವಾಗಿ ಅವರನ್ನು ಈ
ದೇಶದಲ್ಲಿ ನೆಟ್ಟು ಬೆಳೆಯುವಂತೆ ಮಾಡುತ್ತೇನೆ. ಇದನ್ನು
ನಾನು ಮನಃಪೂರ್ವಕವಾಗಿ ಮಾಡುತ್ತೇನೆ.’’’

[42]ಯೆಹೋವನು ಇಂತೆನ್ನುತ್ತಾನೆ: ‘‘ಇಸ್ರೇಲಿನ ಮತ್ತು
ಯೆಹೂದದ ಜನರ ಮೇಲೆ ನಾನು ಈ ಮಹಾವಿಪತ್ತನ್ನು
ತಂದಿದ್ದೇನೆ. ಅದರಂತೆಯೇ ನಾನು ಅವರಿಗೆ ಒಳಿತನ್ನು
ತರುವೆನು. ನಾನು ಅವರಿಗೆ ಒಳ್ಳೆಯದನ್ನು ಮಾಡುವ
ದಾಗಿ ಮಾತುಕೊಡುತ್ತೇನೆ. [43]ನೀವು ‘ಈ ಪ್ರದೇಶದ
ಒಂದು ಬರಿದಾದ ಮರುಭೂಮಿ. ಇಲ್ಲಿ ಜನರಾಗಲೀ
ಪ್ರಾಣಿಗಳಾಗಲೀ ಇಲ್ಲ. ಬಾಬಿಲೋನಿನ ಸೈನ್ಯವು ಈ
ದೇಶವನ್ನು ಸೋಲಿಸಿದೆ’ ಎಂದು ಹೇಳುತ್ತಿರುವಿರಿ. ಆದರೆ
ಮುಂದಿನಕಾಲದಲ್ಲಿ ಜನರು ಪುನಃ ಈ ಪ್ರದೇಶದಲ್ಲಿ
ಹೊಲಗಳನ್ನು ಕೊಂಡುಕೊಳ್ಳುವರು. [44]ಜನರು ಹಣ
ಕೊಟ್ಟು ಭೂಮಿಯನ್ನು ಕೊಂಡುಕೊಳ್ಳುವರು. ಅವರು
ಕರಾರುಪತ್ರಗಳಿಗೆ ಸಹಿಹಾಕುವರು. ಜನರು ಕ್ರಯಪತ್ರ
ಗಳಿಗೆ ಸಹಿ ಹಾಕುವದನ್ನು ಬೇರೆಯವರು ನೋಡುವರು.
ಬೆನ್ಯಾಮೀನ್ ವಂಶದವರು ವಾಸಿಸುವ ಪ್ರದೇಶದಲ್ಲಿ
ಜನರು ಪುನಃ ಹೊಲಗಳನ್ನು ಕೊಂಡುಕೊಳ್ಳುವರು.
ಜೆರುಸಲೇಮಿನ ಸುತ್ತಲಿನ ಪ್ರದೇಶದಲ್ಲಿ ಅವರು ಹೊಲ
ಗಳನ್ನು ಕೊಂಡುಕೊಳ್ಳುವರು. ಅವರು ಯೆಹೂದ
ಪ್ರದೇಶದ ಊರುಗಳಲ್ಲಿಯೂ ಬೆಟ್ಟಪ್ರದೇಶದಲ್ಲಿಯೂ
ಪಶ್ಚಿಮದ ಇಳಿಜಾರು ಪ್ರದೇಶದಲ್ಲಿಯೂ ದಕ್ಷಿಣದ
ಮರಳುಗಾಡಿನಲ್ಲಿಯೂ ಹೊಲಗಳನ್ನು ಕೊಂಡುಕೊಳ್ಳು
ವರು. ನಾನು ನಿಮ್ಮ ಜನರನ್ನು ನಿಮ್ಮ ಪ್ರದೇಶಕ್ಕೆ ಪುನಃ
ಕರೆದುಕೊಂಡು ಬರುವದರಿಂದ ಹೀಗಾಗುವುದು.’’
ಇದು ಯೆಹೋವನ ನುಡಿ.

## ದೇವರ ವಾಗ್ದಾನ

33 ಎರಡನೇ ಬಾರಿ ಯೆರೆಮೀಯನಿಗೆ ಯೆಹೋವ
ನಿಂದ ಸಂದೇಶ ಬಂದಿತು. ಯೆರೆಮೀಯನು
ಇನ್ನೂ ಕಾರಾಗೃಹದ ಅಂಗಳದಲ್ಲಿ ಸೆರೆಯಾಗಿದ್ದನು.
[2]ಯೆಹೋವನು ಭೂಮಿಯನ್ನು ಸೃಷ್ಟಿಸಿದನು. ಆತನೇ
ಅದನ್ನು ಸುರಕ್ಷಿತವಾಗಿಡುವನು. ಯೆಹೋವನು
ಇಂತೆನ್ನುತ್ತಾನೆ: [3]‘‘ಯೆಹೂದವೇ, ನನಗೆ ಪ್ರಾರ್ಥಿಸು.
ಆಗ ನಾನು ನಿನಗೆ ಹೇಳುತ್ತೇನೆ. ನಾನು ನಿನಗೆ ಬಹು
ಮುಖ್ಯವಾದ ರಹಸ್ಯಗಳನ್ನು ತಿಳಿಸುತ್ತೇನೆ. ಈ ಸಂಗತಿ
ಗಳನ್ನು ನೀನು ಹಿಂದೆಂದೂ ಕೇಳಲಿಲ್ಲ. [4]ಯೆಹೋವನು
ಇಸ್ರೇಲಿನ ದೇವರಾಗಿದ್ದಾನೆ. ಜೆರುಸಲೇಮಿನಲ್ಲಿನ ಮನೆ
ಗಳ ಬಗ್ಗೆಯೂ ಮತ್ತು ಯೆಹೂದದ ರಾಜರ ಅರಮನೆಗಳ
ಬಗ್ಗೆಯೂ ಯೆಹೋವನು ಹೀಗೆ ಹೇಳುತ್ತಾನೆ. ವೈರಿಗಳು
ಆ ಮನೆಗಳನ್ನು ಕೆಡವಿಬಿಡುತ್ತಾರೆ. ವೈರಿಗಳು ನಗರದ
ಕೋಟೆಗೋಡೆಗಳ ತುದಿಯವರೆಗೂ ಇಳಿಜಾರಾದ
ಗೋಡೆಗಳನ್ನು ಕಟ್ಟುತ್ತಾರೆ. ವೈರಿಗಳು ಖಡ್ಗ ಹಿಡಿದು ಈ
ನಗರದ ಜನರೊಂದಿಗೆ ಕಾದಾಡುವರು.

[5]‘‘ಜೆರುಸಲೇಮಿನ ಜನರು ಅನೇಕ ದುಷ್ಕೃತ್ಯಗಳನ್ನು
ಮಾಡಿದ್ದಾರೆ. ನಾನು ಅವರ ಮೇಲೆ ಕೋಪಗೊಂಡಿ
ದ್ದೇನೆ; ಅವರಿಗೆ ವಿರುದ್ಧವಾಗಿದ್ದೇನೆ. ನಾನು ಅಲ್ಲಿ ಬಹಳ
ಜನರನ್ನು ಕೊಂದುಹಾಕುವೆನು. ಬಾಬಿಲೋನಿನ ಸೈನ್ಯವು
ಜೆರುಸಲೇಮಿನ ವಿರುದ್ಧ ಹೋರಾಡಲು ಬರುವುದು.
ಜೆರುಸಲೇಮಿನ ಮನೆಗಳಲ್ಲಿ ಅನೇಕಾನೇಕ ಮೃತ ದೇಹ
ಗಳು ಕಣ್ಣಿಗೆ ಬೀಳುವವು.

[6]‘‘ಅನಂತರ ನಾನು ಆ ನಗರದ ಜನರನ್ನು ಕ್ಷಮಿಸು
ವೆನು. ಆ ಜನರು ಶಾಂತಿಯನ್ನೂ ಸುರಕ್ಷಣೆಯನ್ನೂ
ಪಡೆಯುವಂತೆ ಮಾಡುವೆನು. [7]ಯೆಹೂದ ಮತ್ತು ಇಸ್ರೇ
ಲುಗಳಿಗೆ ಮತ್ತೊಮ್ಮೆ ಒಳ್ಳೆಯದಾಗುವಂತೆ ಮಾಡುವೆನು.
ಅವರನ್ನು ನಾನು ಮೊದಲಿನಂತೆ ಶಕ್ತಿಶಾಲಿಗಳನ್ನಾಗಿ
ಮಾಡುವೆನು. [8]ಅವರು ನನ್ನ ವಿರುದ್ಧ ಪಾಪಗಳನ್ನು ಮಾಡಿ
ದರೂ ಅವರ ಪಾಪಗಳನ್ನು ತೊಳೆದುಬಿಡುವೆನು. ಅವರು
ನನ್ನ ವಿರುದ್ಧ ಕಾದಾಡಿದರೂ ಅವರನ್ನು ಕ್ಷಮಿಸುವೆನು.
[9]ಆಗ ಜೆರುಸಲೇಮ್ ಒಂದು ಅದ್ಭುತವಾದ ಸ್ಥಳ

ವಾಗುವುದು; ಜನರು ಸಂತೋಷದಿಂದಿರುವರು. ಅಲ್ಲಿ ನಡೆದ ಒಳ್ಳೆಯ ಸಂಗತಿಗಳ ಬಗ್ಗೆ ಕೇಳಿದಾಗ ಬೇರೆ ಜನಾಂಗಗಳ ಜನರು ಅದನ್ನು ಹೊಗಳುವರು; ವಿಸ್ಮಯ ಪಡುವರು. ನಾನು ಜೆರುಸಲೇಮಿಗೆ ಮಾಡುತ್ತಿರುವ ಒಳಿತಿನ ವಿಷಯವು ಅವರ ಕಿವಿಗೆ ಬೀಳುವುದು.

[10]‘‘‘ನಮ್ಮ ದೇಶವು ಒಂದು ಬರಿದಾದ ಮರುಭೂಮಿ
ಯಾಗಿದೆ. ಅಲ್ಲಿ ಜನರಾಗಲೀ ಪ್ರಾಣಿಗಳಾಗಲೀ ವಾಸಿಸು
ವದಿಲ್ಲ’ ಎಂದು ನೀವು ಹೇಳುತ್ತಿರುವಿರಿ. ಜೆರುಸಲೇಮಿನ
ಬೀದಿಗಳಲ್ಲಿ ಮತ್ತು ಯೆಹೂದದ ಊರುಗಳಲ್ಲಿ ಈಗ
ಮೌನವಿದೆ. ಆದರೆ ಬೇಗನೆ ಅಲ್ಲಿ ಧ್ವನಿಕೇಳಿಸುವುದು.
[11]ಅಲ್ಲಿ ಹರ್ಷದ ಮತ್ತು ಸಂತೋಷದ ಧ್ವನಿ ಕೇಳಿ
ಬರುವುದು. ಅಲ್ಲಿ ವಧುವರರ ಸಂತೋಷದ ಧ್ವನಿ ಕೇಳಿ
ಸುವುದು. ಜನರು ಯೆಹೋವನ ಆಲಯಕ್ಕೆ ತಮ್ಮ
ಕಾಣಿಕೆಗಳನ್ನು ಅರ್ಪಿಸಲು ಬರುವ ಧ್ವನಿಯು ಕೇಳಿಸು
ವುದು. ಅವರು ‘ಸರ್ವಶಕ್ತನಾದ ಯೆಹೋವನನ್ನು
ಸ್ತುತಿಸಿರಿ. ಆತನು ಒಳ್ಳೆಯವನು. ಆತನ ಕರುಣೆಯು
ಶಾಶ್ವತವಾಗಿರುವುದು’ ಎಂದು ಹೇಳುವರು. ನಾನು
ಯೆಹೂದಕ್ಕೆ ಪುನಃ ಸುಸ್ಥಿತಿಯನ್ನು ತರುವುದರಿಂದ
ಜನರು ಹೀಗೆ ಹೇಳುವರು. ಅದು ಮೊದಲಿನಂತೆ ಆಗು
ವುದು.’’ ಯೆಹೋವನು ಈ ವಿಷಯಗಳನ್ನು ಹೇಳಿದನು.

[12]ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ: ‘‘ಈ
ಸ್ಥಳವು ಈಗ ಬರಿದಾಗಿದೆ. ಈಗ ಇಲ್ಲಿ ಜನರಾಗಲೀ ಪಶು
ಗಳಾಗಲೀ ವಾಸಿಸುವದಿಲ್ಲ. ಆದರೆ ಯೆಹೂದದ ಎಲ್ಲಾ
ಊರುಗಳಲ್ಲಿ ಜನರು ವಾಸಿಸುವರು; ಕುರುಬರು
ವಾಸಿಸುವರು. ಕುರಿಮಂದೆಗಳಿಗಾಗಿ ಹುಲ್ಲುಗಾವಲುಗ
ಳಿರುವವು. [13]ಕುರಿಗಳು ತಮ್ಮ ಮುಂದೆ ನಡೆದುಕೊಂಡು
ಹೋಗುವಾಗ ಕುರುಬರು ಅವುಗಳನ್ನು ಎಣಿಸುವರು.
ಇಡೀ ದೇಶದಲ್ಲೆಲ್ಲ ಅಂದರೆ ಬೆಟ್ಟಪ್ರದೇಶದಲ್ಲಿಯೂ
ಪಶ್ಚಿಮದ ಇಳಿಜಾರು ಪ್ರದೇಶಗಳಲ್ಲಿಯೂ ನೆಗೆವ್
ಪ್ರದೇಶದಲ್ಲಿಯೂ ಯೆಹೂದದ ಎಲ್ಲಾ ಊರುಗ
ಳಲ್ಲಿಯೂ ತಮ್ಮ ಕುರಿಗಳನ್ನು ಎಣಿಸುತ್ತಿರುವರು.’’

### ಉತ್ತಮ ಶಾಖೆ

[14]ಇದು ಯೆಹೋವನ ನುಡಿ: ‘‘ನಾನು ಇಸ್ರೇಲಿನ
ಮತ್ತು ಯೆಹೂದದ ಜನರಿಗೆ ಒಂದು ವಿಶೇಷವಾದ
ವಾಗ್ದಾನವನ್ನು ಮಾಡಿದೆ. ನನ್ನ ವಾಗ್ದಾವು ನೆರವೇರುವ
ಸಮಯ ಬರುತ್ತಿದೆ.

[15]ಆಗ ನಾನು ದಾವೀದನ ವಂಶದಿಂದ ಒಳ್ಳೆಯದಾದ
ಮೊಳಕೆಯೊಂದನ್ನು’ ಚಿಗುರಿಸುವೆನು. ಆ ಮೊಳಕೆಯು
ದೇಶಕ್ಕೆ ಒಳ್ಳೆಯದನ್ನೂ ನೀತಿಯುತವಾದುದನ್ನೂ
ಮಾಡುವುದು. [16]ಆಗ ಯೆಹೂದ್ಯರು ಸುರಕ್ಷಿತರಾಗಿರು
ವರು. ಜೆರುಸಲೇಮಿನಲ್ಲಿ ಜನರು ಸುರಕ್ಷಿತರಾಗಿರುವರು.
ಆ ‘ಮೊಳಕೆಯ’ ಹೆಸರು ‘ಯೆಹೋವನು
ಒಳ್ಳೆಯವನು.’’’*

[17]ಯೆಹೋವನು ಇಂತೆನ್ನುತ್ತಾನೆ: ‘‘ಯಾವಾಗಲೂ
ದಾವೀದನ ವಂಶದವನೊಬ್ಬನು ಸಿಂಹಾಸನಾರೂಢ
ನಾಗಿದ್ದುಕೊಂಡು ಇಸ್ರೇಲರನ್ನು ಆಳುವನು. [18]ಯಾವಾ
ಗಲೂ ಲೇವಿವಂಶದವರೇ ಯಾಜಕರಾಗಿರುವರು. ಆ
ಯಾಜಕರು ಸದಾಕಾಲ ನನ್ನ ಎದುರಿನಲ್ಲಿ ನಿಂತು
ಕೊಂಡು ಸರ್ವಾಂಗಹೋಮ, ಧಾನ್ಯಸಮರ್ಪಣೆ ಮತ್ತು
ಯಜ್ಞಗಳನ್ನು ಮಾಡುವರು.’’

[19]ಯೆರೆಮೀಯನಿಗೆ ಯೆಹೋವನಿಂದ ಈ ಸಂದೇಶ
ಬಂದಿತು. [20]ಯೆಹೋವನು ಹೀಗೆ ಹೇಳಿದನು: ‘‘ಹಗಲು
ಮತ್ತು ರಾತ್ರಿಗಳ ಜೊತೆ ನಾನೊಂದು ಒಡಂಬಡಿಕೆಯನ್ನು
ಮಾಡಿಕೊಂಡಿದ್ದೇನೆ. ಅವುಗಳು ಶಾಶ್ವತವಾಗಿ ಮುಂದು
ವರಿಯಲು ನಾನು ಒಪ್ಪಿಕೊಂಡಿದ್ದೇನೆ. ನೀವು ಆ
ಒಡಂಬಡಿಕೆಯನ್ನು ಬದಲಾಯಿಸಲು ಸಾಧ್ಯವಿಲ್ಲ. ನೀವು
ಆ ಒಡಂಬಡಿಕೆಯನ್ನು ಬದಲಾಯಿಸಬಹುದಾದರೆ
[21]ನೀವು ದಾವೀದನ ಮತ್ತು ಲೇವಿಯರ ಜೊತೆ ನಾನು
ಮಾಡಿಕೊಂಡ ಒಪ್ಪಂದವನ್ನೂ ಬದಲಾಯಿಸಬಹುದು.
ಆಗ ದಾವೀದನ ವಂಶದವರು ರಾಜರಾಗಲಾರರು ಮತ್ತು
ಲೇವಿಯರ ವಂಶದವರು ಯಾಜಕರಾಗಲಾರರು.
[22]ಆದರೆ ನಾನು ನನ್ನ ಸೇವಕನಾದ ದಾವೀದನಿಗೂ ಲೇವಿ
ಯರಿಗೂ ಅಸಂಖ್ಯಾತ ಸಂತಾನವನ್ನು ಕೊಡುತ್ತೇನೆ.
ಅವರು ಆಕಾಶದ ನಕ್ಷತ್ರಗಳಂತೆಯೂ ಸಮುದ್ರದ ತೀರದ
ಮರಳಿನಂತೆಯೂ ಅಸಂಖ್ಯಾತರಾಗುವರು.’’

[23]ಯೆರೆಮೀಯನು ಯೆಹೋವನಿಂದ ಈ ಸಂದೇಶ
ವನ್ನು ಪಡೆದನು: [24]‘‘ಯೆರೆಮೀಯನೇ, ಜನರು ಏನು
ಹೇಳಿದರೆಂಬುದನ್ನು ಕೇಳಲಿಲ್ಲವೇ? ‘ಯೆಹೋವನು
ಯೆಹೂದದಲ್ಲಿ ಮತ್ತು ಇಸ್ರೇಲಿನಲ್ಲಿ ಎರಡು ಕುಟುಂಬ
ಗಳನ್ನು ಆರಿಸಿಕೊಂಡನು; ಆದರೆ ಈಗ ಅವರನ್ನು
ತಿರಸ್ಕರಿಸಿದ್ದಾನೆ.’ ಎಂದು ಅವರು ಹೇಳುತ್ತಿದ್ದಾರೆ. ಅನ್ಯ
ಜನರು ನನ್ನ ಜನರನ್ನು ಎಷ್ಟು ದ್ವೇಷಿಸುತ್ತಾರೆಂದರೆ,
ಅವರು ಒಂದು ಜನಾಂಗವಾಗಿ ಮುಂದುವರಿಯುವುದು
ಅವರಿಗೆ ಇಷ್ಟವೇ ಇಲ್ಲ.’’

[25]ಯೆಹೋವನು ಇಂತೆನ್ನುತ್ತಾನೆ: ‘‘ಹಗಲಿರುಗಳ
ಸಂಗಡ ನಾನು ಮಾಡಿಕೊಂಡ ಒಡಂಬಡಿಕೆ ಸ್ಥಿರವಾಗಿಲ್ಲ
ದಿದ್ದರೆ ಮತ್ತು ಭೂಮ್ಯಾಕಾಶಗಳಿಗೆ ನಾನು ಕಟ್ಟಳೆಗಳನ್ನೇ
ವಿಧಿಸಿಲ್ಲದಿದ್ದರೆ. [26]ಅವರನ್ನು ತ್ಯಜಿಸಬಹುದೇನೊ!
ಯಾಕೋಬನ ಸಂತಾನದವರನ್ನು ತ್ಯಜಿಸಿ ದಾವೀದನ
ವಂಶದವರು ಅಬ್ರಹಾಮ, ಇಸ್ಸಾಕ ಮತ್ತು ಯಾಕೋಬರ

**ಯೆಹೋವನೇ ಒಳ್ಳೆಯವನು** ಅಕ್ಷರಶಃ ‘‘ನಮ್ಮ ನೀತಿಸ್ವರೂಪತೆಯು ಯೆಹೋವನು ಮಾತ್ರ.’’ ‘ಯೆಹೋವನು ನಮ್ಮನ್ನು ನಿರಾಪರಾಧಿಗಳನ್ನಾಗಿ ಮಾಡುತ್ತಾನೆ’’ ಅಥವಾ ‘‘ನಮಗೆ ಜಯವನ್ನು ಕೊಡುತ್ತಾನೆ.’’

ಸಂತತಿಯವರನ್ನು ಆಳದಂತೆ ಮಾಡಬಹುದೇನೊ! ಆದರೆ
ದಾವೀದನು ನನ್ನ ಸೇವಕ. ನಾನು ಅವರಿಗೆ ಕರುಣೆ
ತೋರೇ ತೋರುವೆನು; ಅವರಿಗೆ ಒಳ್ಳೆಯದಾಗುವಂತೆ
ಮಾಡೇ ಮಾಡುವೆನು.''

## ಯೆಹೂದದ ರಾಜನಾದ ಚಿದ್ಕೀಯನಿಗೆ ಒಂದು ಎಚ್ಚರಿಕೆ

34 ಯೆಹೋವನಿಂದ ಯೆರೆಮೀಯನಿಗೆ ಒಂದು
ಸಂದೇಶ ಬಂದಿತು. ಬಾಬಿಲೋನಿನ ರಾಜನಾದ
ನೆಬೂಕದ್ನೆಚ್ಚರನು ಜೆರುಸಲೇಮ್ ಮತ್ತು ಅದರ ಸುತ್ತ
ಮುತ್ತಲಿನ ಊರುಗಳ ವಿರುದ್ಧ ಯುದ್ಧ ಮಾಡುತ್ತಿದ್ದಾಗ
ಈ ಸಂದೇಶ ಬಂದಿತು. ಆಗ ನೆಬೂಕೆದ್ನೆಚ್ಚರನ ಸಂಗಡ
ಅವನ ಸಮಸ್ತ ಸೈನ್ಯವು ಮತ್ತು ಅವನ ಸಾಮ್ರಾಜ್ಯದಲ್ಲಿದ್ದ
ಎಲ್ಲಾ ರಾಜ್ಯಗಳ ಮತ್ತು ಜನರ ಸೈನ್ಯವು ಇತ್ತು.
2ಆ ಸಂದೇಶ ಹೀಗಿತ್ತು: ''ಇಸ್ರೇಲಿನ ದೇವರಾದ
ಯೆಹೋವನು ಹೀಗೆ ಹೇಳುತ್ತಾನೆ: ಯೆರೆಮೀಯನೇ,
ಯೆಹೂದದ ರಾಜನಾದ ಚಿದ್ಕೀಯನ ಬಳಿಗೆ ಹೋಗಿ
ಅವನಿಗೆ ಈ ಸಂದೇಶವನ್ನು ತಿಳಿಸು. 'ಚಿದ್ಕೀಯನೇ,
ಯೆಹೋವನು ಹೀಗೆ ಹೇಳುತ್ತಾನೆ: ಅತಿ ಶೀಘ್ರದಲ್ಲಿ
ನಾನು ಜೆರುಸಲೇಮ್ ನಗರವನ್ನು ಬಾಬಿಲೋನಿನ ರಾಜ
ನಿಗೆ ಒಪ್ಪಿಸುತ್ತೇನೆ; ಅವನು ಅದನ್ನು ಸುಟ್ಟುಬಿಡುತ್ತಾನೆ.
3ಚಿದ್ಕೀಯನೇ, ನೀನು ಬಾಬಿಲೋನಿನ ರಾಜನಿಂದ
ತಪ್ಪಿಸಿಕೊಳ್ಳಲಾರೆ. ನಿಶ್ಚಿತವಾಗಿ ನಿನ್ನನ್ನು ಹಿಡಿದು ಅವನಿಗೆ
ಒಪ್ಪಿಸಲಾಗುವುದು. ಬಾಬಿಲೋನಿನ ರಾಜನನ್ನು ನೀನು
ಪ್ರತ್ಯಕ್ಷವಾಗಿ ನೋಡುವೆ. ಅವನು ನಿನ್ನೊಂದಿಗೆ ಮುಖಾ
ಮುಖಿಯಾಗಿ ಮಾತನಾಡುವನು; ನೀನು ಬಾಬಿಲೋ
ನಿಗೆ ಹೋಗುವೆ. 4ಯೆಹೂದದ ರಾಜನಾದ ಚಿದ್ಕೀ
ಯನೇ, ಯೆಹೋವನ ವಾಗ್ದಾನವನ್ನು ಕೇಳು. ಯೆಹೋ
ವನು ನಿನ್ನ ಬಗ್ಗೆ ಹೀಗೆ ಹೇಳುತ್ತಾನೆ. ನಿನ್ನನ್ನು ಖಡ್ಗದಿಂದ
ಕೊಲ್ಲಲಾಗುವುದಿಲ್ಲ. 5ನೀನು ಸಮಾಧಾನದಿಂದ
ಸಾಯುವೆ. ನೀನು ರಾಜನಾಗುವ ಮುನ್ನ ಆಳಿದ ನಿನ್ನ
ಪೂರ್ವಿಕರಿಗೆ ಗೌರವ ತೋರುವದಕ್ಕಾಗಿ ಜನರು ಶವ
ಸಂಸ್ಕಾರದ ಧೂಪವನ್ನು ಹಾಕಿದ್ದರು. ಹಾಗೆಯೇ ನಿನ್ನನ್ನು
ಗೌರವಿಸಲು ಜನರು ಶವಸಂಸ್ಕಾರದ ಧೂಪವನ್ನು
ಹಾಕುವರು. ಅವರು ನಿನಗೋಸ್ಕರ ಅಳುವರು. ಅವರು
ದುಃಖದಿಂದ, ''ಅಯ್ಯೋ, ಯೆಹೋವನೇ'' ಎಂದು
ಗೋಳಾಡುವರು. ಸ್ವತಃ ನಾನೇ ನಿನಗೆ ಈ ವಾಗ್ದಾನವನ್ನು
ಮಾಡುತ್ತಿದ್ದೇನೆ.''' ಇದು ಯೆಹೋವನ ನುಡಿ.
6ಆದುದರಿಂದ ಯೆರೆಮೀಯನು ಜೆರುಸಲೇಮಿ
ನಲ್ಲಿದ್ದ ಚಿದ್ಕೀಯನಿಗೆ ಯೆಹೋವನ ಸಂದೇಶವನ್ನು
ಕೊಟ್ಟನು. 7ಆಗ ಬಾಬಿಲೋನಿನ ರಾಜನ ಸೈನ್ಯವು ಜೆರುಸ
ಲೇಮಿನ ವಿರುದ್ಧ ಹೋರಾಡುತ್ತಿತ್ತು. ಬಾಬಿಲೋನಿನ
ಸೈನ್ಯವು ತಾನು ಇನ್ನೂ ಸ್ವಾಧೀನಪಡಿಸಿಕೊಳ್ಳದ ಯೆಹೂ
ದದ ನಗರಗಳ ವಿರುದ್ಧ ಕೂಡ ಹೋರಾಡುತ್ತಿತ್ತು. ಆ
ಪಟ್ಟಣಗಳೆಂದರೆ ಲಾಕೀಷ ಮತ್ತು ಅಜೇಕ. ಯೆಹೂದ
ದಲ್ಲಿ ಕೋಟೆಗಳನ್ನು ಹೊಂದಿದ್ದ ನಗರಗಳೆಂದರೆ
ಇವೆರಡೇ.

## ಜನರು ಒಡಂಬಡಿಕೆಯನ್ನು ಮುರಿದರು

8ರಾಜನಾದ ಚಿದ್ಕೀಯನು ಜೆರುಸಲೇಮಿನ ಎಲ್ಲಾ
ಜನರೊಂದಿಗೆ ಇಬ್ರಿಯದ ಗುಲಾಮರೆಲ್ಲರನ್ನೂ ಬಿಡು
ಗಡೆ ಮಾಡುವದಾಗಿ ಮಾತುಕೊಟ್ಟಿದ್ದನು. ಚಿದ್ಕೀಯನು
ಹೀಗೆ ಮಾತುಕೊಟ್ಟ ತರುವಾಯ ಯೆಹೋವನಿಂದ
ಯೆರೆಮೀಯನಿಗೆ ಒಂದು ಸಂದೇಶ ಬಂದಿತು. 9ಪ್ರತಿ
ಯೊಬ್ಬ ವ್ಯಕ್ತಿಯು ತನ್ನ ಇಬ್ರಿಯ ದಾಸದಾಸಿಯರನ್ನು
ಬಿಡುಗಡೆ ಮಾಡಬೇಕಾಗಿತ್ತು. ಯೆಹೂದದ ಕುಲದ
ಯಾರನ್ನೂ ಗುಲಾಮರನ್ನಾಗಿ ಇಟ್ಟುಕೊಳ್ಳುವಂತಿರ
ಲಿಲ್ಲ. 10ಆದುದರಿಂದ ಯೆಹೂದದ ಸಮಸ್ತ
ಮುಖಂಡರು ಮತ್ತು ಎಲ್ಲಾ ಜನರು ತಮ್ಮ ದಾಸದಾಸಿ
ಯರನ್ನು ಬಿಡುಗಡೆ ಮಾಡುವುದಾಗಿಯೂ ಅವರಿಂದ
ಮುಂದೆ ಕೆಲಸಮಾಡಿಸುವದಿಲ್ಲ ಎಂಬುದಾಗಿಯೂ
ಒಪ್ಪಿಕೊಂಡರು. ಆದುದರಿಂದ ಎಲ್ಲಾ ಗುಲಾಮರನ್ನು
ಬಿಡುಗಡೆ ಮಾಡಲಾಯಿತು. 11ಬಳಿಕ ಗುಲಾಮರನ್ನು
ಇಟ್ಟುಕೊಂಡಿದ್ದ ಜನರು ತಮ್ಮ ಮನಸ್ಸನ್ನು ಬದಲಾಯಿಸಿ
ತಾವು ಬಿಡುಗಡೆ ಮಾಡಿದ ಜನರನ್ನು ಪುನಃ ತಮ್ಮ
ಗುಲಾಮರನ್ನಾಗಿ ಮಾಡಿಕೊಂಡರು.
12ಆಗ ಯೆರೆಮೀಯನಿಗೆ ಯೆಹೋವನಿಂದ ಈ
ಸಂದೇಶ ಬಂದಿತು: 13ಯೆರೆಮೀಯನೇ, ಇಸ್ರೇಲಿನ
ದೇವರಾದ ಯೆಹೋವನು ಹೀಗೆ ಹೇಳುತ್ತಾನೆ: ''ನಾನು
ಈಜಿಪ್ಟಿನಲ್ಲಿ ಗುಲಾಮರಾಗಿದ್ದ ನಿಮ್ಮ ಪೂರ್ವಿಕರನ್ನು
ಅಲ್ಲಿಂದ ಹೊರತಂದೆನು. ನಾನು ಹಾಗೆ ಮಾಡಿದಾಗ
ಅವರ ಸಂಗಡ ಒಂದು ಒಡಂಬಡಿಕೆಯನ್ನು ಮಾಡಿ
ಕೊಂಡೆ. 14ನಾನು ನಿಮ್ಮ ಪೂರ್ವಿಕರಿಗೆ 'ಪ್ರತಿ ಏಳು
ವರ್ಷದ ಕೊನೆಯಲ್ಲಿ ಪ್ರತಿಯೊಬ್ಬ ವ್ಯಕ್ತಿಯು ತನ್ನ
ಇಬ್ರಿಯ ಗುಲಾಮರನ್ನು ಬಿಡುಗಡೆ ಮಾಡಬೇಕು.
ತನ್ನನ್ನು ನಿಮಗೆ ಮಾರಿಕೊಂಡ ಇಬ್ರಿಯ ಸಹೋದರ
ನಿಮ್ಮಲ್ಲಿದ್ದರೆ ಅವನು ಆರು ವರ್ಷ ಸೇವೆಮಾಡಿದ ನಂತರ
ಅವನನ್ನು ಬಿಡುಗಡೆ ಮಾಡಬೇಕು' ಎಂದು ಹೇಳಿದ್ದೆ.
ಆದರೆ ನಿಮ್ಮ ಪೂರ್ವಿಕರು ನನ್ನ ಮಾತುಗಳನ್ನು ಕಿವಿಗೆ
ಹಾಕಿಕೊಳ್ಳಲಿಲ್ಲ; ನನ್ನ ಕಡೆಗೆ ಗಮನಕೊಡಲಿಲ್ಲ.
15ಸ್ವಲ್ಪಕಾಲದ ಹಿಂದೆ ನೀವು ನೀತಿಯುತವಾದದ್ದನ್ನು
ಮಾಡಬೇಕೆಂದು ನಿಮ್ಮ ಮನಸ್ಸನ್ನು ಬದಲಾಯಿಸಿದಿರಿ.
ನಿಮ್ಮಲ್ಲಿ ಪ್ರತಿಯೊಬ್ಬರು ನಿಮ್ಮಲ್ಲಿದ್ದ ಇಬ್ರಿಯ ಗುಲಾಮ
ರನ್ನು ಬಿಡುಗಡೆ ಮಾಡಿದಿರಿ. ನೀವು ನನ್ನ ಹೆಸರಿನಿಂದ

ಖ್ಯಾತಿಗೊಂಡಿರುವ ಆಲಯದಲ್ಲಿ, ನನ್ನ ಸಮ್ಮುಖದಲ್ಲಿ
ಒಂದು ಒಡಂಬಡಿಕೆಯನ್ನು ಸಹ ಮಾಡಿಕೊಂಡಿರಿ.
[16]ಆದರೆ ಈಗ ನೀವು ಮನಸ್ಸನ್ನು ಬದಲಾಯಿಸಿದ್ದೀರಿ.
ನೀವು ನನ್ನ ಹೆಸರಿಗೆ ಗೌರವ ಕೊಡುವದಿಲ್ಲವೆಂಬುದನ್ನು
ತೋರಿಸಿದ್ದೀರಿ. ನೀವು ಇದನ್ನು ಹೇಗೆ ಮಾಡಿದಿರಿ?
ನಿಮ್ಮಲ್ಲಿ ಪ್ರತಿಯೊಬ್ಬರು ನೀವು ಬಿಡುಗಡೆ ಮಾಡಿದ ದಾಸ
ದಾಸಿಯರನ್ನು ಹಿಂದಕ್ಕೆ ತೆಗೆದುಕೊಂಡಿರುವಿರಿ. ಅವರು
ಪುನಃ ಗುಲಾಮರಾಗುವಂತೆ ಒತ್ತಾಯಿಸಿರುವಿರಿ.

[17]‘‘ಆದಕ್ಕಾಗಿ ಯೆಹೋವನು ಇಂತೆನ್ನುತ್ತಾನೆ, ‘ನೀವು
ನನ್ನ ಆಜ್ಞಾಪಾಲನೆಯನ್ನು ಮಾಡಿಲ್ಲ. ನೀವು ನಿಮ್ಮ
ಸಹೋದರರಾದ ಇಬ್ರಿಯರಿಗೆ ಸ್ವಾತಂತ್ರ್ಯವನ್ನು
ಕೊಟ್ಟಿಲ್ಲ. ನೀವು ಒಡಂಬಡಿಕೆಗನುಸಾರವಾಗಿ ನಡೆದು
ಕೊಂಡಿಲ್ಲ. ಆದಕ್ಕಾಗಿ ನಾನು ‘‘ಸ್ವಾತಂತ್ರ್ಯವನ್ನು ಕೊಡು
ತ್ತೇನೆ.’’’ ಇದು ಯೆಹೋವನ ನುಡಿ. ‘ಖಡ್ಗ, ಭಯಂಕರ
ವಾದ ವ್ಯಾಧಿ ಮತ್ತು ಹಸಿವು ಇವುಗಳಿಗೆ ನಿಮ್ಮನ್ನು
ಕೊಲ್ಲುವ ‘‘ಸ್ವಾತಂತ್ರ್ಯವನ್ನು’’ ನಾನು ಕೊಡುತ್ತೇನೆ. ಈ
ವಿಷಯ ಕೇಳಿ ಭೂಲೋಕದ ಸಮಸ್ತ ರಾಜ್ಯಗಳು ಭಯ
ಪಡುವಂತೆ ಮಾಡುತ್ತೇನೆ. [18]ನನ್ನ ಒಡಂಬಡಿಕೆಯನ್ನು
ಮುರಿದ ಮತ್ತು ನನ್ನ ಸಮ್ಮುಖದಲ್ಲಿ ಕೊಟ್ಟ ಮಾತನ್ನು
ಉಳಿಸಿ ಕೊಳ್ಳದ ಜನರನ್ನು ನಾನು ತ್ಯಜಿಸುವೆನು. ಇವರು
ನನ್ನ ಮುಂದೆ ಒಂದು ಕರುವನ್ನು ಎರಡು ತುಂಡುಗಳಾಗಿ
ಕತ್ತರಿಸಿ ಇಟ್ಟು ಆ ಎರಡು ತುಂಡುಗಳ ಮಧ್ಯದಿಂದ ಹಾದು
ಹೋದರು. [19]ಯೆಹೂದದ ಮತ್ತು ಜೆರುಸಲೇಮಿನ
ನಾಯಕರು, ಪ್ರಮುಖ ಅಧಿಕಾರಿಗಳು, ಯಾಜಕರು
ಮತ್ತು ದೇಶದ ಸಕಲ ಜನರು ಇವರೆಲ್ಲ ನನ್ನ ಮುಂದೆ
ಒಡಂಬಡಿಕೆಯನ್ನು ಮಾಡಿದಾಗ ಕರುವಿನ ಶರೀರದ
ಎರಡು ತುಂಡುಗಳ ಮಧ್ಯದಿಂದ ಹಾದುಹೋದರು.
[20]ಆದುದರಿಂದ ನಾನು ಆ ಜನರನ್ನು ಅವರ ವೈರಿಗಳಿಗೆ
ಮತ್ತು ಅವರನ್ನು ಕೊಲ್ಲಲು ಇಚ್ಛಿಸುವ ಪ್ರತಿಯೊಬ್ಬರಿಗೆ
ಕೊಡುತ್ತೇನೆ. ಆ ಜನರ ದೇಹಗಳು ಗಾಳಿಯಲ್ಲಿ ಹಾರಾ
ಡುವ ಪಕ್ಷಿಗಳಿಗೂ ಭೂಮಿಯ ಮೇಲಿನ ಕಾಡು
ಪ್ರಾಣಿಗಳಿಗೂ ಆಹಾರವಾಗುವವು. [21]ಯೆಹೂದದ
ರಾಜನಾದ ಚಿದ್ಕೀಯನನ್ನೂ ಅವನ ನಾಯಕರುಗಳನ್ನೂ
ನಾನು ಅವರ ಶತ್ರುಗಳಿಗೂ ಅವರನ್ನು ಕೊಲ್ಲಬಯಸುವ
ಜನರಿಗೂ ಕೊಡುವೆನು. ಬಾಬಿಲೋನಿನ ಸೈನ್ಯವು
ಜೆರುಸಲೇಮನ್ನು ಬಿಟ್ಟುಹೋಗಿದ್ದರೂ ನಾನು ಚಿದ್ಕೀಯ
ಮತ್ತು ಅವನ ಜನರನ್ನು ಬಾಬಿಲೋನಿನ ಸೈನಿಕರ ಕೈಗೆ
ಒಪ್ಪಿಸು ತ್ತೇನೆ. [22]ಬಾಬಿಲೋನಿನ ಸೈನ್ಯವು ಜೆರುಸ
ಲೇಮಿಗೆ ಬರ ಬೇಕೆಂದು ನಾನು ಆಜ್ಞಾಪಿಸುತ್ತೇನೆ. ಇದು
ಯೆಹೋವನ ನುಡಿ. ‘ಆ ಸೈನ್ಯವು ಜೆರುಸಲೇಮಿನ ವಿರುದ್ಧ
ಹೋರಾಡುವುದು. ಅವರು ಅದನ್ನು ಸ್ವಾಧೀನಪಡಿಸಿ
ಕೊಳ್ಳುವರು ಮತ್ತು ಅದಕ್ಕೆ ಬೆಂಕಿಯಿಟ್ಟು ಸುಟ್ಟು
ಬಿಡುವರು. ನಾನು ಯೆಹೂದ ಪ್ರದೇಶದ ನಗರ ಗಳನ್ನು
ನಾಶಮಾಡುವೆನು. ಆ ನಗರಗಳು ಬರಿದಾದ ಮರು
ಭೂಮಿಗಳಾಗುವವು. ಅಲ್ಲಿ ಯಾರೂ ವಾಸಮಾಡ
ಲಾರರು.’’’

### ರೇಕಾಬ್ಯರ ಒಂದು ಒಳ್ಳೆಯ ದೃಷ್ಟಾಂತ

35 ಯೆಹೋಯಾಕೀಮನು ಯೆಹೂದವನ್ನು ಆಳು
ತ್ತಿದ್ದ ಕಾಲದಲ್ಲಿ ಯೆರೆಮೀಯನಿಗೆ ಯೆಹೋವ
ನಿಂದ ಒಂದು ಸಂದೇಶ ಬಂದಿತು. ಯೆಹೋಯಾಕೀ
ಮನು ರಾಜನಾದ ಯೋಷೀಯನ ಮಗನಾಗಿದ್ದನು.
ಯೆಹೋವನ ಸಂದೇಶ ಹೀಗಿತ್ತು: [2]‘‘ಯೆರೆಮೀಯನೇ,
ರೇಕಾಬನ ಕುಟುಂಬದವರಲ್ಲಿಗೆ* ಹೋಗು. ಅವರನ್ನು
ಯೆಹೋವನ ಆಲಯದ ಒಂದು ಪಕ್ಕದ ಕೋಣೆಗೆ
ಕರೆದು, ಕುಡಿಯುವದಕ್ಕೆ ದ್ರಾಕ್ಷಾರಸವನ್ನು ಕೊಡು.’’

[3]ಆದುದರಿಂದ ನಾನು (ಯೆರೆಮೀಯನು) ಯಾಜನ್ಯ
ನನ್ನು ಕರೆಯಲು ಹೋದೆನು. ಯಾಜನ್ಯನು ಯೆರೆಮೀ
ಯನೆಂಬುವನ * ಮಗ. ಯೆರೆಮೀಯನು ಹಬಚ್ಚಿನ್ಯನ
ಮಗ. ನಾನು ಯಾಜನ್ಯನ ಎಲ್ಲಾ ಸಹೋದರರನ್ನೂ
ಮಕ್ಕಳನ್ನೂ ಕರೆತಂದೆನು. ನಾನು ರೇಕಾಬ್ಯರ ಇಡೀ
ಮನೆತನವನ್ನು ಒಟ್ಟಿಗೆ ಸೇರಿಸಿದೆನು. [4]ಅನಂತರ ನಾನು
ರೇಕಾಬ ವಂಶದವರನ್ನು ಯೆಹೋವನ ಆಲಯದಲ್ಲಿ
ಕರೆತಂದೆನು.

ನಾವು ಹಾನಾನನ ಮಕ್ಕಳ ಕೋಣೆ ಎಂದು ಕರೆಯ
ಲ್ಪಡುವ ಕೋಣೆಯೊಳಕ್ಕೆ ಹೋದೆವು. ಹಾನಾನನು
ಇಗ್ದಲ್ಯನೆಂಬವನ ಮಗನು. ಹಾನಾನನು ದೇವರ
ಮನುಷ್ಯ.* ಈ ಕೋಣೆಯು ಯೆಹೂದದ ರಾಜ
ಕುಮಾರರ ಕೋಣೆಯ ಪಕ್ಕದಲ್ಲಿತ್ತು. ಇದು ಶಲ್ಲೂಮನ
ಮಗನಾದ ಮಾಸೇಯನ ಕೋಣೆಯ ಮೇಲ್ಗಡೆ ಇತ್ತು.
ಮಾಸೇಯನು ಆಲಯದ ದ್ವಾರಪಾಲಕನಾಗಿದ್ದನು.
[5]ಆಮೇಲೆ ನಾನು ದ್ರಾಕ್ಷಾರಸ ತುಂಬಿದ ಕೆಲವು ಪಾತ್ರೆ
ಗಳನ್ನು ಮತ್ತು ಬಟ್ಟಲುಗಳನ್ನು ರೇಕಾಬ್ಯ ಕುಟುಂಬದ
ವರ ಮುಂದಿಟ್ಟು, ‘‘ಸ್ವಲ್ಪ ದ್ರಾಕ್ಷಾರಸವನ್ನು ಕುಡಿಯಿರಿ’’
ಎಂದೆನು.

[6]ಆದರೆ ರೇಕಾಬ್ಯರು, ‘‘ನಾವು ದ್ರಾಕ್ಷಾರಸವನ್ನು ಕುಡಿ
ಯುವುದೇ ಇಲ್ಲ. ಏಕೆಂದರೆ ನಮ್ಮ ಪೂರ್ವಿಕನಾದ
ರೇಕಾಬನ ಮಗನಾದ ಯೋನಾದಾಬನು ನಮಗೆ,

---

**ರೇಕಾಬನ ಕುಟುಂಬ**-ರೇಖನ ಮಗನಾದ ಯೋನಾದಾಬನ ವಂಶಕ್ಕೆ ಸೇರಿದ ಜನರು. ಈ ಕುಟುಂಬದವರು ಯೆಹೋವನಿಗೆ ನಂಬಿಗಸ್ತ ರಾಗಿದ್ದರು. ಯೋನಾದಾಬನ ಚರಿತ್ರೆ 2 ರಾಜರುಗಳು 10: 15-2 8 ರಲ್ಲಿದೆ.

**ಯೆರೆಮೀಯ** ಪ್ರವಾದಿಯಾದ ಯೆರೆಮೀಯನಲ್ಲ. ಇವನು ಬೇರೆ ವ್ಯಕ್ತಿ.

**ದೇವರ ಮನುಷ್ಯ** ಪ್ರವಾದಿಗಿರುವ ಮತ್ತೊಂದು ಹೆಸರು.

‘ನೀವು ಮತ್ತು ನಿಮ್ಮ ಸಂತಾನದವರು ಎಂದೆಂದಿಗೂ
ದ್ರಾಕ್ಷಾರಸವನ್ನು ಕುಡಿಯಬಾರದು. 7ನೀವೆಂದೂ ಮನೆ
ಯನ್ನು ಕಟ್ಟಿಕೊಳ್ಳಬಾರದು, ಬೀಜಗಳನ್ನು ಬಿತ್ತ
ಬಾರದು, ದ್ರಾಕ್ಷಿತೋಟಗಳನ್ನು ಬೆಳಸಬಾರದು. ನೀವು
ಅವುಗಳಲ್ಲಿ ಒಂದನ್ನು ಕೂಡ ಎಂದಿಗೂ ಮಾಡಬಾರದು.
ನೀವು ಕೇವಲ ಗುಡಾರಗಳಲ್ಲಿ ವಾಸಿಸಬೇಕು. ಆಗ ನೀವು
ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವಲಸೆಹೋಗುವ
ದೇಶದಲ್ಲಿ ಬಹಳ ಕಾಲದವರೆಗೆ ಇರಬಲ್ಲಿರಿ’ ಎಂದು
ಆಜ್ಞಾಪಿಸಿದ್ದಾನೆ. 8ಆದುದರಿಂದ ರೇಕಾಬ್ಯರಾದ ನಾವು
ನಮ್ಮ ಪೂರ್ವಿಕನಾದ ಯೋನಾದಾಬನು ಕೊಟ್ಟ ಆಜ್ಞೆ
ಯನ್ನು ಸಂಪೂರ್ಣವಾಗಿ ಪಾಲಿಸಿದ್ದೇವೆ. ನಾವು ದ್ರಾಕ್ಷಾ
ರಸವನ್ನು ಕುಡಿಯುವುದಿಲ್ಲ. ನಮ್ಮ ಹೆಂಡತಿಯರು ಮತ್ತು
ಮಕ್ಕಳು ಸಹ ಎಂದೂ ದ್ರಾಕ್ಷಾರಸವನ್ನು ಕುಡಿಯುವು
ದಿಲ್ಲ. 9ವಾಸಿಸುವದಕ್ಕೆ ನಾವೆಂದೂ ಮನೆಗಳನ್ನು ಕಟ್ಟುವ
ದಿಲ್ಲ: ದ್ರಾಕ್ಷಿ ತೋಟಗಳನ್ನಾಗಲೀ ಹೊಲಗಳನ್ನಾಗಲೀ
ಕೊಳ್ಳುವುದಿಲ್ಲ; ಬೀಜವನ್ನು ಬಿತ್ತುವದಿಲ್ಲ. 10ನಾವು
ಗುಡಾರದಲ್ಲಿ ವಾಸಮಾಡಿದ್ದೇವೆ; ನಮ್ಮ ಪೂರ್ವಿಕನಾದ
ಯೋನಾದಾಬನು ನಮಗೆ ವಿಧಿಸಿದ್ದನ್ನೆಲ್ಲ ಆಸಕ್ತಿಯಿಂದ
ಮಾಡಿದ್ದೇವೆ. 11ಆದರೆ ಬಾಬಿಲೋನಿನ ರಾಜನಾದ
ನೆಬೂಕದ್ನೆಚ್ಚರನು ಯೆಹೂದ ದೇಶದ ಮೇಲೆ ದಾಳಿ
ಮಾಡಿದಾಗ ನಾವು ಜೆರುಸಲೇಮ್ ನಗರದಲ್ಲಿ ಪ್ರವೇಶ
ಮಾಡಿ ಹೀಗೆ ಮಾತನಾಡಿಕೊಂಡೆವು, ‘ಬನ್ನಿ, ನಾವು ಬಾಬಿ
ಲೋನಿನ ಸೈನ್ಯದಿಂದ ಮತ್ತು ಅರಾಮ್ಯರ ಸೈನ್ಯದಿಂದ
ತಪ್ಪಿಸಿಕೊಳ್ಳುವದಕ್ಕಾಗಿ ಜೆರುಸಲೇಮ್ ನಗರವನ್ನು
ಪ್ರವೇಶಿಸೋಣ.’ ಹೀಗಾಗಿ ನಾವು ಜೆರುಸಲೇಮ್ ನಗರ
ದಲ್ಲಿ ವಾಸಿಸುತ್ತಿದ್ದೇವೆ.’’

12ಆಗ ಯೆರೆಮೀಯನಿಗೆ ಯೆಹೋವನಿಂದ ಸಂದೇಶ
ಬಂದಿತು: 13ಇಸ್ರೇಲಿನ ದೇವರೂ ಸರ್ವಶಕ್ತನೂ ಆಗಿ
ರುವ ಯೆಹೋವನು ಹೀಗೆ ಹೇಳಿದನು: ‘‘ಯೆರೆಮೀ
ಯನೇ, ಹೋಗಿ ಈ ಸಂದೇಶವನ್ನು ಯೆಹೂದದ ಮತ್ತು
ಜೆರುಸಲೇಮಿನ ಜನರಿಗೆ ತಿಳಿಸು. ನೀವು ಇದರಿಂದ
ಒಂದು ಪಾಠವನ್ನು ಕಲಿಯಬೇಕು ಮತ್ತು ನನ್ನ ಸಂದೇಶ
ವನ್ನು ಅನುಸರಿಸಬೇಕು. 14ರೇಕಾಬ್ಯನ ಮಗನಾದ
ಯೋನಾದಾಬನು ತನ್ನ ಮಕ್ಕಳಿಗೆ ದ್ರಾಕ್ಷಾರಸವನ್ನು
ಕುಡಿಯಬೇಡಿರೆಂದು ಹೇಳಿದನು. ಅವನ ಆಜ್ಞೆಯನ್ನು
ಪಾಲಿಸಲಾಗಿದೆ. ಇಂದಿನವರೆಗೂ ಯೋನಾದಾಬನ
ಸಂತಾನದವರು ತಮ್ಮ ಪೂರ್ವಿಕರ ಆಜ್ಞೆಯನ್ನು ಪಾಲಿಸಿ
ದ್ದಾರೆ. ಅವರು ದ್ರಾಕ್ಷಾರಸವನ್ನು ಕುಡಿಯುವುದಿಲ್ಲ.
ನಾನೇ ನಿಮ್ಮ ದೇವರಾದ ಯೆಹೋವನು. ನಾನು ಯೆಹೂ
ದದ ಜನರಾದ ನಿಮಗೆ ಮತ್ತೆಮತ್ತೆ ಸಂದೇಶಗಳನ್ನು
ಕೊಟ್ಟಿದ್ದೇನೆ. ಆದರೆ ನೀವು ನನ್ನ ಆಜ್ಞೆಗಳನ್ನು ಪಾಲಿಸ
ಲಿಲ್ಲ. 15ನಾನು ನನ್ನ ಸೇವಕರಾದ ಪ್ರವಾದಿಗಳನ್ನು ಇಸ್ರೇ
ಲಿಗೆ ಮತ್ತು ಯೆಹೂದಕ್ಕೆ ಕಳುಹಿಸಿಕೊಟ್ಟೆ. ನಾನು ಅವ
ರನ್ನು ನಿಮ್ಮಲ್ಲಿಗೆ ಪುನಃ ಪುನಃ ಕಳುಹಿಸಿಕೊಟ್ಟೆ. ಆ
ಪ್ರವಾದಿಗಳು ‘ಇಸ್ರೇಲಿನ ಮತ್ತು ಯೆಹೂದದ ಪ್ರತಿ
ಯೊಬ್ಬರೂ ದುಷ್ಕೃತ್ಯಗಳನ್ನು ಮಾಡುವದನ್ನು ನಿಲ್ಲಿಸ
ಬೇಕು. ನೀವು ಒಳ್ಳೆಯವರಾಗಿರಬೇಕು. ಬೇರೆ ದೇವರು
ಗಳನ್ನು ಅನುಸರಿಸಬಾರದು. ಅವುಗಳನ್ನು ಪೂಜಿಸ
ಬಾರದು. ಅವುಗಳ ಸೇವೆಮಾಡಬಾರದು’ ಎಂದು ಹೇಳಿ
ದರು. ನನ್ನ ಆಜ್ಞೆಯನ್ನು ಪಾಲಿಸಿದರೆ ನಾನು ನಿಮಗೂ
ಮತ್ತು ನಿಮ್ಮ ಪೂರ್ವಿಕರಿಗೂ ಕೊಟ್ಟ ಪ್ರದೇಶದಲ್ಲಿ ನೀವು
ವಾಸಿಸಬಹುದು ಎಂದು ಹೇಳಿದ್ದೆ. ಆದರೆ ನೀವು ನನ್ನ
ಸಂದೇಶದ ಕಡೆಗೆ ಗಮನ ಕೊಡಲಿಲ್ಲ. 16ಯೋನಾದಾ
ಬನ ಸಂತಾನದವರು ತಮ್ಮ ಪೂರ್ವಿಕರು ವಿಧಿಸಿದ ಆಜ್ಞೆ
ಗಳನ್ನು ಪಾಲಿಸಿದರು ಆದರೆ ಯೆಹೂದದ ಜನರು ನನ್ನ
ಆಜ್ಞೆಯನ್ನು ಪಾಲಿಸಲಿಲ್ಲ.’’ 17ಇಸ್ರೇಲಿನ ದೇವರೂ
ಸರ್ವಶಕ್ತನೂ ಆಗಿರುವ ಯೆಹೋವನು ಹೀಗೆಂದನು
‘‘ಯೆಹೂದ ಮತ್ತು ಜೆರುಸಲೇಮಿಗೆ ಅನೇಕ ಕೇಡುಗಳು
ಸಂಭವಿಸುವವೆಂದು ನಾನು ಹೇಳಿರುವೆನು. ಆ ಎಲ್ಲಾ
ಕೇಡುಗಳು ಬೇಗನೆ ಸಂಭವಿಸುವಂತೆ ನಾನು ಮಾಡು
ವೆನು. ನಾನು ಆ ಜನರೊಂದಿಗೆ ಮಾತನಾಡಿದೆ, ಆದರೆ
ಅವರು ಕಿವಿಗೆ ಹಾಕಿಕೊಳ್ಳಲಿಲ್ಲ. ನಾನು ಅವರನ್ನು
ಕೂಗಿದೆ, ಆದರೆ ಅವರು ನನಗೆ ಓಗೊಡಲಿಲ್ಲ.’’

18ಅನಂತರ ಯೆರೆಮೀಯನು ರೇಕಾಬ್ಯರಿಗೆ ಹೀಗೆ
ಹೇಳಿದನು, ‘‘ಸರ್ವಶಕ್ತನಾದ ಯೆಹೋವನು, ಇಸ್ರೇಲಿನ
ದೇವರು ಹೀಗೆ ಹೇಳುತ್ತಾನೆ. ‘ನೀವು ನಿಮ್ಮ ಪೂರ್ವಿಕ
ನಾದ ಯೋನಾದಾಬನ ಆಜ್ಞೆಗಳನ್ನು ಪಾಲಿಸಿದ್ದೀರಿ.
ನೀವು ಯೋನಾದಾಬನ ಎಲ್ಲಾ ಉಪದೇಶಗಳನ್ನು ಅನುಸ
ರಿಸಿದ್ದೀರಿ. ನೀವು ಅವನು ವಿಧಿಸಿದಂತೆ ಎಲ್ಲವನ್ನು
ಮಾಡಿದ್ದೀರಿ.

19ಆದುದರಿಂದ ಇಸ್ರೇಲಿನ ದೇವರಾದ ಸರ್ವಶಕ್ತನಾದ
ಯೆಹೋವನು ‘ರೇಕಾಬನ ಮಗನಾದ ಯೋನಾದಾಬನ
ಸಂತಾನದವರು ಯಾವಾಗಲೂ ನನ್ನ ಸೇವೆಯಲ್ಲಿರು
ವರು’ ಎಂದು ನುಡಿದನು.’’’

## ಯೆಹೋಯಾಕೀಮನು ಯೆರೆಮೀಯನ ಗ್ರಂಥವನ್ನು ಸುಟ್ಟದ್ದು

36 ಯೋಷೀಯನ ಮಗನಾದ ಯೆಹೋಯಾಕೀ
ಮನ ಆಳ್ವಿಕೆಯ ನಾಲ್ಕನೇ ವರ್ಷದಲ್ಲಿ
ಯೆರೆಮೀಯನಿಗೆ ಯೆಹೋವನಿಂದ ಒಂದು ಸಂದೇಶ
ಬಂದಿತು. ಯೆಹೋವನ ಸಂದೇಶ ಹೀಗಿತ್ತು: 2‘‘ಯೆರೆ
ಮೀಯನೇ, ಒಂದು ಸುರಳಿಯನ್ನು ತೆಗೆದುಕೊಂಡು
ನಾನು ನಿನಗೆ ಹೇಳಿದ ಎಲ್ಲಾ ಸಂದೇಶಗಳನ್ನು ಅದರಲ್ಲಿ
ಬರೆದಿಡು. ನಾನು ನಿನಗೆ ಇಸ್ರೇಲ್ ಮತ್ತು ಯೆಹೂದ

ಜನಾಂಗಗಳ ಬಗ್ಗೆಯೂ ಮತ್ತು ಉಳಿದ ಜನಾಂಗಗಳ ಬಗ್ಗೆಯೂ ಹೇಳಿದ್ದೇನೆ. ಯೋಷೀಯನ ಆಳ್ವಿಕೆಯ ಕಾಲದಿಂದ ಇಲ್ಲಿಯವರೆಗೂ ನಾನು ನಿನಗೆ ಹೇಳಿದ ಪ್ರತಿಯೊಂದೂ ಶಬ್ದವನ್ನೂ ಬರೆದಿಡು.
3ನಾನು ಮಾಡಬೇಕೆಂದು ಯೋಚಿಸಿರುವುದನ್ನು ಯೆಹೂದ ಕುಲದವರು ಕೇಳಿಸಿಕೊಳ್ಳಬಹುದು. ಅವರು ಮಾಡುತ್ತಿರುವ ದುಷ್ಕೃತ್ಯಗಳನ್ನು ನಿಲ್ಲಿಸಬಹುದು. ಅವರು ಹಾಗೆ ಮಾಡಿದರೆ ಅವರು ಮಾಡಿದ ಪಾಪಗಳನ್ನು ನಾನು ಕ್ಷಮಿಸುವೆನು.''

4ಯೆರೆಮೀಯನು ಬಾರೂಕನೆಂಬ ಒಬ್ಬ ವ್ಯಕ್ತಿಯನ್ನು ಕರೆದನು. ಬಾರೂಕನು ನೇರೀಯನ ಮಗ. ಯೆರೆಮೀಯನು ಯೆಹೋವನ ಸಂದೇಶವನ್ನು ಹೇಳುತ್ತಿದ್ದಾಗ ಬಾರೂಕನು ಆ ಸಂದೇಶವನ್ನು ಸುರುಳಿಯ ಮೇಲೆ ಬರೆದನು.
5ಆಗ ಯೆರೆಮೀಯನು ಬಾರೂಕನಿಗೆ ಹೀಗೆ ಹೇಳಿದನು: ''ಯೆಹೋವನ ಆಲಯಕ್ಕೆ ನಾನು ಹೋಗಲಾರೆ. ಅಲ್ಲಿ ಹೋಗುವದಕ್ಕೆ ಅಪ್ಪಣೆಯಿಲ್ಲ.
6ಆದುದರಿಂದ ನೀನು ಯೆಹೋವನ ಆಲಯಕ್ಕೆ ಉಪವಾಸದ ದಿನ ಹೋಗು ಮತ್ತು ಸುರುಳಿಯಲ್ಲಿ ಬರೆದದ್ದನ್ನು ಜನರ ಮುಂದೆ ಓದು. ನಾನು ಹೇಳುತ್ತಿದ್ದಂತೆಯೇ ನೀನು ಸುರುಳಿಯ ಮೇಲೆ ಬರೆದುಕೊಂಡ ಯೆಹೋವನ ಸಂದೇಶಗಳನ್ನು ಆ ಜನರ ಮುಂದೆ ಓದು . ತಾವು ವಾಸಮಾಡುವ ಸ್ಥಳಗಳಿಂದ ಜೆರುಸಲೇಮಿಗೆ ಬಂದಿರುವ ಎಲ್ಲಾ ಯೆಹೂದ್ಯರ ಮುಂದೆ ಆ ಸಂದೇಶಗಳನ್ನು ಓದು.
7ಬಹುಶಃ ಆ ಜನಗಳು ತಮಗೆ ಸಹಾಯ ಮಾಡೆಂದು ಯೆಹೋವನನ್ನು ಪ್ರಾರ್ಥಿಸಬಹುದು. ಆಗ ಪ್ರತಿಯೊಬ್ಬನೂ ದುಷ್ಕಾರ್ಯ ಮಾಡುವದನ್ನು ನಿಲ್ಲಿಸಬಹುದು. ಆ ಜನರ ಮೇಲೆ ತನಗೆ ಬಹಳ ಕೋಪ ಬಂದಿದೆ ಎಂದು ಯೆಹೋವನು ಪ್ರಕಟಿಸಿದ್ದಾನೆ.''
8ಪ್ರವಾದಿಯಾದ ಯೆರೆಮೀಯನು ತನಗೆ ಮಾಡಲು ಹೇಳಿದಂತೆ ನೇರೀಯನ ಮಗನಾದ ಬಾರೂಕನು ಮಾಡಿದನು. ಬಾರೂಕನು ಸುರುಳಿಯ ಮೇಲೆ ಬರೆದ ಯೆಹೋವನ ಸಂದೇಶಗಳನ್ನು ಗಟ್ಟಿಯಾಗಿ ಯೆಹೋವನ ಆಲಯದಲ್ಲಿ ಓದಿದನು.

9ಯೆಹೋಯಾಕೀಮನ ಆಳ್ವಿಕೆಯ ಐದನೇ ವರ್ಷದ ಒಂಭತ್ತನೇ ತಿಂಗಳಲ್ಲಿ ಒಂದು ಉಪವಾಸವನ್ನು ಪ್ರಕಟಿಸಲಾಯಿತು. ಜೆರುಸಲೇಮ್ ನಗರದ ನಿವಾಸಿಗಳೆಲ್ಲರೂ ಯೆಹೂದದ ಬೇರೆ ಊರುಗಳಿಂದ ಜೆರುಸಲೇಮಿಗೆ ಬಂದವರೆಲ್ಲರೂ ಯೆಹೋವನ ಆಲಯದಲ್ಲಿ ಉಪವಾಸ ಮಾಡುವರೆಂದು ಗೊತ್ತುಪಡಿಸಲಾಗಿತ್ತು.
10ಆ ಸಂದರ್ಭದಲ್ಲಿ ಯೆರೆಮೀಯನು ಹೇಳಿದ ಆ ಸಂದೇಶವನ್ನು ಬಾರೂಕನು ಓದಿದನು. ಅವನು ಯೆಹೋವನ ಆಲಯದಲ್ಲಿ ಆ ಸುರುಳಿಯನ್ನು ಓದಿದನು. ಯೆಹೋವನ ಆಲಯದಲ್ಲಿದ್ದ ಎಲ್ಲಾ ಜನರು ಕೇಳುವಂತೆ ಬಾರೂಕನು ಆ ಸುರುಳಿಯನ್ನು ಓದಿದನು. ಆ ಸುರುಳಿಯನ್ನು ಓದುವಾಗ ಬಾರೂಕನು ಮೇಲಿನ ಪ್ರಾಕಾರದಲ್ಲಿದ್ದ ಗೆಮರ್ಯನ ಕೋಣೆಯಲ್ಲಿದ್ದನು. ಆ ಕೋಣೆಯು ಪವಿತ್ರ ಆಲಯದ ಹೊಸ ಬಾಗಿಲಿನ ಹತ್ತಿರ ಇತ್ತು. ಗೆಮರ್ಯನು ಶಾಫಾನನ ಮಗನಾಗಿದ್ದನು. ಗೆಮರ್ಯನು ಯೆಹೋವನ ಆಲಯದಲ್ಲಿ ಯೆಹೂದ್ಯ ಧರ್ಮಶಾಸ್ತ್ರಜ್ಞನಾಗಿದ್ದನು.

11ಬಾರೂಕನು ಓದಿದ ಎಲ್ಲಾ ಯೆಹೋವನ ಸಂದೇಶಗಳನ್ನು ಮೀಕಾಯನೆಂಬ ಒಬ್ಬ ಮನುಷ್ಯನು ಕೇಳಿಸಿಕೊಂಡನು. ಮೀಕಾಯನು ಶಾಫಾನನ ಮಗನಾದ ಗೆಮರ್ಯನ ಮಗನಾಗಿದ್ದನು.
12ಸುರುಳಿಯಲ್ಲಿದ್ದ ಸಂದೇಶಗಳನ್ನು ಕೇಳಿದ ಕೂಡಲೇ ಅವನು ರಾಜನ ಅರಮನೆಯಲ್ಲಿದ್ದ ಆಸ್ಥಾನದ ಅಧಿಕಾರಿಯ ಕೋಣೆಗೆ ಹೋದನು. ರಾಜನ ಅರಮನೆಯಲ್ಲಿ ಎಲ್ಲಾ ರಾಜಾಧಿಕಾರಿಗಳು ಕುಳಿತುಕೊಂಡಿದ್ದರು. ಆ ಅಧಿಕಾರಿಗಳ ಹೆಸರುಗಳು ಇಂತಿವೆ: ದರ್ಬಾರಿನ ಅಧಿಕಾರಿಯಾದ ಎಲೀಷಾಮನು, ಶೆಮಾಯಾನ ಮಗನಾದ ದೆಲಾಯನು, ಅಕ್ಬೋರನ ಮಗನಾದ ಎಲ್ನಾಥಾನನು, ಶಾಫಾನನ ಮಗನಾದ ಗೆಮರ್ಯನು, ಹನನೀಯನ ಮಗನಾದ ಚಿದ್ಕೀಯನು ಮತ್ತು ಉಳಿದೆಲ್ಲ ಅಧಿಕಾರಿಗಳು ಅಲ್ಲಿದ್ದರು.
13ಬಾರೂಕನು ಸುರಳಿಯಿಂದ ಓದಿದ ಎಲ್ಲಾ ವಿಷಯವನ್ನು ಮೀಕಾಯನು ಈ ಅಧಿಕಾರಿಗಳಿಗೆ ಹೇಳಿದನು.

14ಆಗ ಆ ಅಧಿಕಾರಿಗಳೆಲ್ಲ ಯೆಹೂದಿ ಎಂಬುವನನ್ನು ಬಾರೂಕನಲ್ಲಿಗೆ ಕಳುಹಿಸಿಕೊಟ್ಟರು. ಯೆಹೂದಿಯು ಶೆಲೆಮ್ಯನ ಮಗನಾದ ನೆಥನ್ಯನ ಮಗ. ಶೆಲೆಮ್ಯನು ಕೂಷಿಯ ಮಗ. ಯೆಹೂದಿಯು ಬಾರೂಕನಿಗೆ, ''ನೀನು ಓದಿದ ಸುರುಳಿಯನ್ನು ತೆಗೆದುಕೊಂಡು ನನ್ನ ಜೊತೆ ಬಾ'' ಎಂದು ಕರೆದನು.

ನೇರೀಯನ ಮಗನಾದ ಬಾರೂಕನು ಸುರುಳಿಯನ್ನು ತೆಗೆದುಕೊಂಡು ಯೆಹೂದಿಯ ಸಂಗಡ ಆ ಅಧಿಕಾರಿಗಳ ಹತ್ತಿರಕ್ಕೆ ಹೋದನು.

15ಆಗ ಆ ಅಧಿಕಾರಿಗಳು ಬಾರೂಕನಿಗೆ, ''ಕುಳಿತುಕೊ. ಆ ಸುರುಳಿಯನ್ನು ನಮ್ಮ ಮುಂದೆ ಓದು'' ಎಂದರು. ಬಾರೂಕನು ಸುರುಳಿಯನ್ನು ಅವರ ಮುಂದೆ ಓದಿದನು.

16ಆ ರಾಜ್ಯಾಧಿಕಾರಿಗಳು ಆ ಸುರುಳಿಯಲ್ಲಿ ಬರೆದ ಎಲ್ಲಾ ಸಂದೇಶಗಳನ್ನು ಕೇಳಿ ಭಯಪಟ್ಟು ಒಬ್ಬರ ಮುಖವನ್ನೊಬ್ಬರು ನೋಡಿದರು. ಅವರು ಬಾರೂಕನಿಗೆ, ''ನಾವು ರಾಜನಾದ ಯೆಹೋಯಾಕೀಮನಿಗೆ ಈ ಸುರುಳಿಯಲ್ಲಿರುವ ಸಂದೇಶಗಳ ಬಗ್ಗೆ ತಿಳಿಸಬೇಕು'' ಎಂದರು.
17ಬಳಿಕ ಆ ಅಧಿಕಾರಿಗಳು ಬಾರೂಕನಿಗೆ, ''ಬಾರೂಕನೇ, ನೀನು ಈ ಸುರುಳಿಯ ಮೇಲೆ ಬರೆದ ಸಂದೇಶಗಳನ್ನು ಎಲ್ಲಿಂದ ಪಡೆದೆ? ಯೆರೆಮೀಯನು

ನಿನಗೆ ಹೇಳಿದ್ದನ್ನು ನೀನು ಬರೆದು ಕೊಂಡೆಯಾ?
ಹೇಳು'' ಎಂದು ಪ್ರಶ್ನಿಸಿದರು.
18''ಹೌದು, ಯೆರೆಮೀಯನು ಬಾಯಿಂದ ಹೇಳಿ
ದನು ಮತ್ತು ನಾನು ಆ ಸಂದೇಶಗಳನ್ನೆಲ್ಲಾ ಶಾಹಿಯಿಂದ
ಸುರುಳಿಯ ಮೇಲೆ ಬರೆದನು'' ಎಂದು ಬಾರೂಕನು
ಉತ್ತರಿಸಿದನು.
19ಆಗ ರಾಜಾಧಿಕಾರಿಗಳು ಬಾರೂಕನಿಗೆ, ''ನೀನು
ಮತ್ತು ಯೆರೆಮೀಯನು ಹೋಗಿ ಎಲ್ಲಿಯಾದರೂ ಅಡಗಿ
ಕೊಳ್ಳಿರಿ. ಎಲ್ಲಿ ಅಡಗಿಕೊಂಡಿದ್ದೀರೆಂಬುದನ್ನು
ಯಾರಿಗೂ ತಿಳಿಸಬೇಡಿ'' ಎಂದು ಹೇಳಿದರು.
20ಅನಂತರ ರಾಜಾಧಿಕಾರಿಗಳು ಆ ಸುರುಳಿಯನ್ನು
ಧರ್ಮಶಾಸ್ತ್ರಜ್ಞನಾದ ಎಲೀಷಾಮನ ಕೋಣೆಯಲ್ಲಿ
ಇಟ್ಟರು. ಅವರು ರಾಜನಾದ ಯೆಹೋಯಾಕೀಮನ
ಬಳಿಗೆ ಹೋಗಿ ಆ ಸುರುಳಿಯ ಬಗ್ಗೆ ವಿವರವಾಗಿ
ಹೇಳಿದರು.
21ರಾಜನಾದ ಯೆಹೋಯಾಕೀಮನು ಆ ಸುರುಳಿ
ಯನ್ನು ತರುವದಕ್ಕೆ ಯೆಹೂದಿಯನ್ನು ಕಳುಹಿಸಿದನು.
ಯೆಹೂದಿಯು ಧರ್ಮಶಾಸ್ತ್ರಜ್ಞನಾದ ಎಲೀಷಾಮನ
ಕೋಣೆಯಿಂದ ಆ ಸುರುಳಿಯನ್ನು ತಂದನು. ಬಳಿಕ
ರಾಜನು ಮತ್ತು ಅವನ ಸುತ್ತಲು ನಿಂತ ಅಧಿಕಾರಿಗಳೆಲ್ಲ
ಕೇಳುವಂತೆ ಯೆಹೂದಿಯು ಆ ಸುರುಳಿಯನ್ನು
ಓದಿದನು. 22ಅದು ನಡೆದದು ಒಂಭತ್ತನೇ ತಿಂಗಳಲ್ಲಿ,
ರಾಜನಾದ ಯೆಹೋಯಾಕೀಮನು ಚಳಿಗಾಲದ ಮನೆ
ಯಲ್ಲಿ ಕುಳಿತಿದ್ದನು. ರಾಜನ ಎದುರಿಗಿದ್ದ ಒಂದು ಸಣ್ಣ
ಅಗ್ಗಿಷ್ಟಿಕೆಯಲ್ಲಿ ಬೆಂಕಿಯು ಉರಿಯುತ್ತಿತ್ತು. 23ಯೆಹೂ
ದಿಯು ಸುರುಳಿಯನ್ನು ಓದಲು ಪ್ರಾರಂಭಿಸಿದನು.
ಆದರೆ ಅವನು ಎರಡು ಅಥವಾ ಮೂರು ಅಂಕಣಗಳನ್ನು
ಓದಿ ಮುಗಿಸಿದ ಕೂಡಲೆ ರಾಜನಾದ ಯೆಹೋಯಾಕೀ
ಮನು ಆ ಸುರುಳಿಯನ್ನು ಕಸಿದುಕೊಂಡು ಆ ಅಂಕಣಗ
ಳನ್ನು ಒಂದು ಸಣ್ಣ ಚೂರಿಯಿಂದ ಕತ್ತರಿಸಿ ಅಗ್ಗಿಷ್ಟಿಕೆಯಲ್ಲಿ
ಎಸೆಯತೊಡಗಿದನು. ಕೊನೆಗೆ ಇಡೀ ಸುರುಳಿಯನ್ನು
ಸುಟ್ಟುಹಾಕಲಾಯಿತು. 24ಈ ಸುರುಳಿಯಲ್ಲಿದ್ದ ಸಂದೇಶ
ವನ್ನು ಕೇಳಿ ರಾಜನಾದ ಯೆಹೋಯಾಕೀಮನು ಮತ್ತು
ಅವನ ಸೇವಕರು ಗಾಬರಿಯಾಗಲಿಲ್ಲ. ತಾವು ತಪ್ಪು
ಮಾಡಿದ್ದಕ್ಕಾಗಿ ದುಃಖವನ್ನು ಸೂಚಿಸಲು ಅವರು ತಮ್ಮ
ವಸ್ತ್ರಗಳನ್ನು ಹರಿದುಕೊಳ್ಳಲಿಲ್ಲ.
25ಎಲ್ನಾಥಾನನೂ ದೆಲಾಯನೂ ಗೆಮರ್ಯನೂ
ಅದನ್ನು ಸುಡಬೇಡವೆಂದು ರಾಜನಿಗೆ ಹೇಳುವ ಪ್ರಯತ್ನ
ಮಾಡಿದರು. ಆದರೆ ರಾಜನು ಅವರ ಮಾತನ್ನು ಕೇಳಲಿಲ್ಲ.
26ರಾಜನಾದ ಯೆಹೋಯಾಕೀಮನು ಲಿಪಿಕಾರನಾದ
ಬಾರೂಕನನ್ನು ಮತ್ತು ಪ್ರವಾದಿಯಾದ ಯೆರೆಮೀಯ
ನನ್ನು ಬಂಧಿಸಬೇಕೆಂದು ರಾಜ ವಂಶೀಯನಾದ
ಎಜ್ರೀಲನ ಮಗನಾದ ಸೆರಾಯನಿಗೂ ಅಬ್ದೇಲನ
ಮಗನಾದ ಶೆಲೆಮ್ಯನಿಗೂ ಆಜ್ಞೆಯನ್ನು ಕೊಟ್ಟನು. ಆದರೆ
ಅವರಿಂದ ಬಾರೂಕನನ್ನು ಮತ್ತು ಯೆರೆಮೀಯನನ್ನು
ಹುಡುಕಲಾಗಲಿಲ್ಲ. ಯಾಕಂದರೆ ಯೆಹೋವನು
ಅವರನ್ನು ಬಚ್ಚಿಟ್ಟಿದ್ದನು.
27ಯೆರೆಮೀಯನು ಬಾರೂಕನಿಗೆ ಹೇಳಿದ್ದ, ಬಾರೂ
ಕನು ಶಾಹಿಯಿಂದ ಬರೆದಿದ್ದ ಸುರುಳಿಯನ್ನು ಯೆಹೋ
ಯಾಕೀಮನು ಸುಟ್ಟುಹಾಕಿದ ಮೇಲೆ ಯೆರೆಮೀಯನಿಗೆ
ಯೆಹೋವನಿಂದ ಈ ಸಂದೇಶ ಬಂದಿತು. 28''ಯೆರೆಮೀ
ಯನೇ, ಇನ್ನೊಂದು ಸುರುಳಿಯನ್ನು ತೆಗೆದುಕೊ.
ಯೆಹೂದದ ರಾಜನಾದ ಯೆಹೋಯಾಕೀಮನು ಸುಟ್ಟು
ಹಾಕಿದ ಮೊದಲನೇ ಸುರುಳಿಯಲ್ಲಿ ಬರೆದ ಎಲ್ಲಾ
ಸಂದೇಶಗಳನ್ನು ಈ ಸುರುಳಿಯ ಮೇಲೆ ಬರೆ. 29ಯೆರೆ
ಮೀಯನೇ, ಯೆಹೂದದ ರಾಜನಾದ ಯೆಹೋಯಾ
ಕೀಮನಿಗೆ ಹೀಗೆ ಹೇಳು, 'ಯೆಹೋವನು ಇಂತೆನ್ನುತ್ತಾನೆ:
ಯೆಹೋಯಾಕೀಮನೇ, ನೀನು ಆ ಸುರುಳಿಯನ್ನು
ಸುಟ್ಟುಬಿಟ್ಟೆ. ನೀನು ''ಬಾಬಿಲೋನ್ ರಾಜನು ಖಂಡಿತ
ವಾಗಿ ಬಂದು ಈ ದೇಶವನ್ನು ನಾಶಮಾಡುವನು ಎಂದು
ಯೆರೆಮೀಯನು ಏಕೆ ಬರೆದನು? ಬಾಬಿಲೋನ್
ರಾಜನು ಈ ದೇಶದ ಮನುಷ್ಯರನ್ನು ಮತ್ತು ಪ್ರಾಣಿಗಳನ್ನು
ನಾಶಮಾಡುವನು ಎಂದು ಏಕೆ ಹೇಳಿದನು?'' ಎಂದು
ಕೇಳಿದೆ.
30ಇಗೋ ಯೆಹೂದದ ರಾಜನಾದ ಯೆಹೋ
ಯಾಕೀಮನ ಬಗ್ಗೆ ಯೆಹೋವನು ಹೀಗೆ ಹೇಳುತ್ತಾನೆ:
ಯೆಹೋಯಾಕೀಮನ ಸಂತಾನದವರು ದಾವೀದನ
ಸಿಂಹಾಸನದ ಮೇಲೆ ಕುಳಿತುಕೊಳ್ಳಲಾಗದು. ಯೆಹೋ
ಯಾಕೀಮನು ಸತ್ತರೆ ರಾಜ ಮರ್ಯಾದೆಯಿಂದ ಅವನ
ಶವಸಂಸ್ಕಾರ ಮಾಡಲಾಗುವದಿಲ್ಲ. ಅವನ ಶವವನ್ನು
ನೆಲದ ಮೇಲೆ ಎಸೆಯಲಾಗುವುದು. ಅವನ ಶವ ಹಗಲಿನ
ತಾಪದಲ್ಲಿ ಮತ್ತು ರಾತ್ರಿಯ ಚಳಿಯಲ್ಲಿ ಹೊರಗೆ ಬಿದ್ದಿರು
ವದು.
31ಯೆಹೋವನಾದ ನಾನು ಯೆಹೋಯಾಕೀಮ
ಮತ್ತು ಅವನ ಮಕ್ಕಳನ್ನು ದಂಡಿಸುವೆನು. ನಾನು ಅವನ
ಅಧಿಕಾರಿಗಳನ್ನೂ ದಂಡಿಸುವೆನು. ಅವರು ದುಷ್ಟರಾದು
ದರಿಂದ ಹೀಗೆ ಮಾಡುವೆನು. ನಾನು ಅವರ ಮೇಲೂ
ಜೆರುಸಲೇಮಿನಲ್ಲಿ ವಾಸಮಾಡುವ ಜನರೆಲ್ಲರ ಮೇಲೂ
ಮತ್ತು ಯೆಹೂದದ ಜನರ ಮೇಲೂ ಭಯಂಕರವಾದ
ಕೇಡನ್ನು ತರಲು ನಿಶ್ಚಯಿಸಿದ್ದೇನೆ. ನಾನು ಹೇಳಿದಂತೆ
ಅವರಿಗೆ ಎಲ್ಲಾ ಕೆಡುಕನ್ನು ಉಂಟುಮಾಡುವೆನು.
ಏಕೆಂದರೆ ಅವರು ನನ್ನ ಮಾತನ್ನು ಕೇಳಲಿಲ್ಲ.'''
32ಅನಂತರ ಯೆರೆಮೀಯನು ಇನ್ನೊಂದು ಸುರುಳಿ
ಯನ್ನು ತೆಗೆದುಕೊಂಡು ನೇರೀಯನ ಮಗನಾದ

ಲಿಪಿಕಾರ ಬಾರೂಕನಿಗೆ ಕೊಟ್ಟನು. ರಾಜ ಯೆಹೋಯಾ
ಕೀಮನು ಸುಟ್ಟುಹಾಕಿದ ಸುರುಳಿಯಲ್ಲಿದ್ದ ಸಂದೇಶ
ವನ್ನೇ ಯೆರೆಮೀಯನು ಹೇಳಿದಂತೆಲ್ಲ ಬಾರೂಕನು
ಸುರುಳಿಯ ಮೇಲೆ ಬರೆದನು. ಬೇರೆ ಹಲವು ಸಂದೇಶ
ಗಳನ್ನು ಎರಡನೇ ಸುರುಳಿಯಲ್ಲಿ ಸೇರಿಸಲಾಯಿತು.

### ಯೆರೆಮೀಯನನ್ನು ಕಾರಾಗೃಹದಲ್ಲಿಡಲಾಯಿತು

37 ನೆಬೂಕದ್ನೆಚ್ಚರನು ಬಾಬಿಲೋನಿನ ರಾಜ
ನಾಗಿದ್ದನು. ನೆಬೂಕದ್ನೆಚ್ಚರನು ಯೆಹೋಯಾ
ಕೀಮನ ಮಗನಾದ ಕೊನ್ಯನ ಸ್ಥಾನದಲ್ಲಿ ಚಿದ್ಕೀಯನನ್ನು
ಯೆಹೂದದ ರಾಜನನ್ನಾಗಿ ನೇಮಿಸಿದ್ದನು. ಚಿದ್ಕೀಯನು
ರಾಜನಾದ ಯೋಷೀಯನ ಮಗನಾಗಿದ್ದನು. 2ಆದರೆ
ಯೆಹೋವನು ಯೆರೆಮೀಯನಿಗೆ ಪ್ರವಾದನೆ ಮಾಡಲು
ಹೇಳಿದ ಸಂದೇಶಗಳ ಕಡೆಗೆ ಗಮನ ಕೊಡಲಿಲ್ಲ.
ಚಿದ್ಕೀಯನ ಸೇವಕರು ಮತ್ತು ಯೆಹೂದದ ಜನರು
ಯೆಹೋವನ ಸಂದೇಶಗಳಿಗೆ ಯಾವ ಗಮನವನ್ನೂ
ಕೊಡಲಿಲ್ಲ.

3ರಾಜನಾದ ಚಿದ್ಕೀಯನು ಯೆಹೂಕಲನೆಂಬುವನನ್ನು
ಮತ್ತು ಯಾಜಕನಾದ ಚೆಫನನನ್ನು ಒಂದು ಸಂದೇಶ
ದೊಂದಿಗೆ ಯೆರೆಮೀಯನಲ್ಲಿಗೆ ಕಳುಹಿಸಿದನು.
ಯೆಹೂಕಲನು ಶೆಲೆಮ್ಯನ ಮಗ. ಯಾಜಕನಾದ
ಚೆಫನ್ಯನು ಮಾಸೇಯನ ಮಗ. ಯೆರೆಮೀಯನಿಗೆ
ಅವರು ತಂದ ಸಂದೇಶ ಹೀಗಿತ್ತು: ''ಯೆರೆಮೀಯನೇ,
ನಮ್ಮ ದೇವರಾದ ಯೆಹೋವನನ್ನು ನಮಗಾಗಿ
ಪ್ರಾರ್ಥಿಸು.''

4(ಆ ಕಾಲದಲ್ಲಿ ಯೆರೆಮೀಯನನ್ನು ಇನ್ನೂ ಕಾರಾ
ಗೃಹದಲ್ಲಿಟ್ಟಿರಲಿಲ್ಲ. ಅವನು ತನ್ನ ಮನಬಂದ ಕಡೆ
ಹೋಗಲು ಸ್ವತಂತ್ರನಾಗಿದ್ದನು. 5ಅದಲ್ಲದೆ ಆಗ
ಫರೋಹನ ಸೈನ್ಯವು ಈಜಿಪ್ಟಿನಿಂದ ಯೆಹೂದದ ಕಡೆಗೆ
ಹೊರಟಿತ್ತು. ಜೆರುಸಲೇಮ್ ನಗರವನ್ನು ಸ್ವಾಧೀನಪಡಿಸಿ
ಕೊಳ್ಳುವ ಉದ್ದೇಶದಿಂದ ಬಾಬಿಲೋನ ಸೈನ್ಯವು ಜೆರುಸ
ಲೇಮ್ ನಗರಕ್ಕೆ ಮುತ್ತಿಗೆ ಹಾಕಿತ್ತು. ಆಗ ಈಜಿಪ್ಟಿನ
ಸೈನ್ಯವು ತಮ್ಮ ಕಡೆ ಬರುತ್ತಿದೆ ಎಂಬ ಸಮಾಚಾರವು
ಬಂದಿತು. ಅದನ್ನು ಕೇಳಿ ಬಾಬಿಲೋನಿನ ಸೈನ್ಯವು
ಈಜಿಪ್ಟಿನ ಸೈನ್ಯವನ್ನೆದುರಿಸಲು ಜೆರುಸಲೇಮನ್ನು ಬಿಟ್ಟು
ಹೋಗಿತ್ತು.)

6ಪ್ರವಾದಿಯಾದ ಯೆರೆಮೀಯನಿಗೆ ಯೆಹೋವ
ನಿಂದ ಸಂದೇಶ ಬಂದಿತು: 7''ಇಸ್ರೇಲಿನ ದೇವರಾದ
ಯೆಹೋವನು ಇಂತೆನ್ನುತ್ತಾನೆ: 'ಯೆಹೂಕಲನೇ ಮತು
ಚೆಫನ್ಯರನೇ, ಯೆಹೂದದ ರಾಜನಾದ ಚಿದ್ಕೀಯನು
ನನಗೆ ಪ್ರಶ್ನೆಗಳನ್ನು ಕೇಳುವದಕ್ಕಾಗಿ ನಿಮ್ಮನ್ನು ನನ್ನಲ್ಲಿಗೆ
ಕಳಿಸಿದ್ದಾನೆಂಬುದು ನನಗೆ ಗೊತ್ತು. ರಾಜನಾದ
ಚಿದ್ಕೀಯನಿಗೆ ಹೀಗೆ ಹೇಳಿರಿ. ಬಾಬಿಲೋನಿನ ಸೈನ್ಯದ
ವಿರುದ್ಧ ನಿಮಗೆ ಸಹಾಯ ಮಾಡಲು ಇಲ್ಲಿಗೆ ಬರುವದ
ಕ್ಕಾಗಿ ಫರೋಹನ ಸೈನ್ಯವು ಈಜಿಪ್ಟಿನಿಂದ ಹೊರಟಿತು.
ಆದರೆ ಫರೋಹನ ಸೈನ್ಯವು ಈಜಿಪ್ಟಿಗೆ ಹಿಂದಿರುಗುವುದು.
8ಬಳಿಕ ಬಾಬಿಲೋನಿನ ಸೈನ್ಯವು ಇಲ್ಲಿಗೆ ಬರುವುದು.
ಅವರು ಜೆರುಸಲೇಮಿನ ಮೇಲೆ ಧಾಳಿ ಮಾಡುವರು. ಆಗ
ಬಾಬಿಲೋನಿನ ಆ ಸೈನ್ಯವು ಜೆರುಸಲೇಮನ್ನು ವಶಪಡಿಸಿ
ಕೊಂಡು ಅದನ್ನು ಸುಟ್ಟುಹಾಕುವುದು.' 9ಯೆಹೋವನು
ಇಂತೆನ್ನುತ್ತಾನೆ: 'ಜೆರುಸಲೇಮ್ ನಿವಾಸಿಗಳೇ ''ಬಾಬಿ
ಲೋನ್ ಸೈನಿಕರು ಖಂಡಿತವಾಗಿಯೂ ನಮ್ಮನ್ನು ಬಿಟ್ಟು
ಹೋಗುವರು'' ಎಂದು ನಿಮಗೆ ನೀವೇ ಹೇಳಿಕೊಂಡು
ನಿಮ್ಮನ್ನು ಮೂರ್ಖರನ್ನಾಗಿ ಮಾಡಿಕೊಳ್ಳಬೇಡಿ, ಅವರು
ನಿಮ್ಮನ್ನು ಬಿಟ್ಟುಹೋಗುವದಿಲ್ಲ. 10ಜೆರುಸಲೇಮಿನ
ಜನಗಳೇ, ನಿಮ್ಮ ಮೇಲೆ ಧಾಳಿ ಮಾಡುವ ಬಾಬಿಲೋನಿನ
ಎಲ್ಲಾ ಸೈನಿಕರನ್ನು ನೀವು ಸೋಲಿಸಿದರೂ ಅವರ ಗುಡಾರ
ದಲ್ಲಿ ಕೆಲವು ಜನ ಗಾಯಗೊಂಡವರು ಉಳಿದಿರುತ್ತಾರೆ.
ಆ ಗಾಯಾಳುಗಳೇ ತಮ್ಮ ಗುಡಾರದಿಂದ ಹೊರಬಂದು
ಜೆರುಸಲೇಮನ್ನು ಸುಟ್ಟುಹಾಕುವರು.'''

11ಈಜಿಪ್ಟ್ ದೇಶದ ಫರೋಹನ ಸೈನ್ಯದೊಂದಿಗೆ
ಕಾದಾಡಲು ಬಾಬಿಲೋನಿನ ಸೈನ್ಯವು ಜೆರುಸಲೇಮನ್ನು
ಬಿಟ್ಟುಹೋದ ಮೇಲೆ 12ಯೆರೆಮೀಯನು ಜೆರುಸಲೇ
ಮಿನಿಂದ ಬೆನ್ಯಾಮೀನ್‌ಪ್ರದೇಶಕ್ಕೆ ಹೋಗ ಬಯಸಿ
ದನು. ತನ್ನ ಮನೆತನಕ್ಕೆ ಸೇರಿದ ಆಸ್ತಿಯ ವಿಭಜನೆಗಾಗಿ
ಅವನು ಹೋಗುತ್ತಿದ್ದನು. 13 ಆದರೆ ಯೆರೆಮೀಯನು
ಜೆರುಸಲೇಮಿನ ಬೆನ್ಯಾಮೀನ್ ಹೆಬ್ಬಾಗಿಲಿನ ಹತ್ತಿರ
ಹೋದಾಗ ಪಹರೆದಾರರ ಮುಖ್ಯಸ್ಥನು ಅವನನ್ನು
ಹಿಡಿದುಕೊಂಡನು. ಆ ಮುಖ್ಯಸ್ಥನ ಹೆಸರು ಇರೀಯ
ನೆಂದು. ಇರೀಯನು ಶೆಲೆಮ್ಯನ ಮಗನು ಮತ್ತು ಶೆಲೆ
ಮ್ಯನು ಹನನ್ಯನ ಮಗ. ಮುಖ್ಯಸ್ಥನಾದ ಇರೀಯನು
ಯೆರೆಮೀಯನನ್ನು ಹಿಡಿದುಕೊಂಡು, ''ಯೆರೆಮೀ
ಯನೇ, ನೀನು ಬಾಬಿಲೋನಿನ ಕಡೆ ಸೇರಿಕೊಳ್ಳುವದ
ಕ್ಕಾಗಿ ನಮ್ಮನ್ನು ಬಿಟ್ಟುಹೋಗುತ್ತಿರುವೆ'' ಎಂದನು.

14''ಅದು ನಿಜವಲ್ಲ, ಬಾಬಿಲೋನಿನವರ ಕಡೆ ಸೇರಿ
ಕೊಳ್ಳಲು ನಾನು ಬಿಟ್ಟುಹೋಗುತ್ತಿಲ್ಲ'' ಎಂದು
ಯೆರೆಮೀಯನು ಇರೀಯನಿಗೆ ಹೇಳಿದನು. ಆದರೆ ಇರೀ
ಯನು ಯೆರೆಮೀಯನ ಮಾತುಗಳನ್ನು ಕಿವಿಗೆ ಹಾಕಿ
ಕೊಳ್ಳಲಿಲ್ಲ. ಇರೀಯನು ಯೆರೆಮೀಯನನ್ನು ಬಂಧಿಸಿ
ಜೆರುಸಲೇಮಿನ ರಾಜಾಧಿಕಾರಿಗಳ ಬಳಿಗೆ ಕರೆ
ದೊಯ್ದನು. 15ಆ ಅಧಿಕಾರಿಗಳು ಯೆರೆಮೀಯನ
ಮೇಲೆ ತುಂಬಾ ಕೋಪಗೊಂಡರು. ಯೆರೆಮೀಯನನ್ನು
ಹೊಡೆಯಬೇಕೆಂದು ಅವರು ಆಜ್ಞೆಯಿತ್ತರು. ಆಮೇಲೆ

ಅವರು ಯೆರೆಮೀಯನನ್ನು ಸೆರೆಮನೆಯಲ್ಲಿಟ್ಟರು. ಆ
ಸೆರೆಮನೆಯು ಯೆಹೋನಾಥಾನನೆಂಬುವನ ಮನೆಯ
ಲ್ಲಿತ್ತು. ಯೆಹೋನಾಥಾನನು ಯೆಹೂದದ ರಾಜನ
ಲಿಪಿಕಾರನಾಗಿದ್ದನು. ಯೆಹೋನಾಥಾನನ ಮನೆಯನ್ನು
ಸೆರೆಮನೆಯನ್ನಾಗಿ ಮಾಡಲಾಗಿತ್ತು 16ಅವರು ಯೆರೆಮೀ
ಯನನ್ನು ಯೆಹೋನಾಥಾನನ ನೆಲಮನೆಯ ಒಂದು
ಕೋಣೆಯಲ್ಲಿಟ್ಟರು. ಆ ಕೋಣೆಯು ನೆಲಮನೆಯ ಕೆಳ
ಭಾಗದಲ್ಲಿತ್ತು. ಯೆರೆಮೀಯನು ಅಲ್ಲಿ ಬಹಳ ದಿವಸ
ಗಳವರೆಗೆ ಇದ್ದನು.

17ಆಗ ರಾಜನಾದ ಚಿದ್ಕೀಯನು ಯೆರೆಮೀಯನನ್ನು
ತನ್ನ ಅರಮನೆಗೆ ಕರೆತರಿಸಿದನು. ಚಿದ್ಕೀಯನು ಯೆರೆಮೀ
ಯನೊಂದಿಗೆ ರಹಸ್ಯವಾಗಿ ಮಾತನಾಡಿ, ''ಯೆಹೋವ
ನಿಂದ ಏನಾದರೂ ಸಂದೇಶವಿದೆಯೊ?'' ಎಂದು
ಕೇಳಿದನು.

''ಹೌದು, ಯೆಹೋವನಿಂದ ಒಂದು ಸಂದೇಶವಿದೆ.
ಚಿದ್ಕೀಯನೇ, ನಿನ್ನನ್ನು ಬಾಬಿಲೋನಿನ ರಾಜನಿಗೆ
ಒಪ್ಪಿಸಲಾಗುವುದು'' ಎಂದು ಯೆರೆಮೀಯನು ಉತ್ತರಿಸಿ
ದನು. 18ಆಮೇಲೆ ಯೆರೆಮೀಯನು ರಾಜನಾದ
ಚಿದ್ಕೀಯನನ್ನು ಹೀಗೆ ಕೇಳಿದನು, ''ನಾನು ಏನು ತಪ್ಪು
ಮಾಡಿದ್ದೇನೆ? ನಾನು ನಿನ್ನ ವಿರುದ್ಧ ಅಥವಾ ನಿನ್ನ
ಅಧಿಕಾರಿಗಳ ವಿರುದ್ಧ ಅಥವಾ ಜೆರುಸಲೇಮಿನ ಜನರ
ವಿರುದ್ಧ ಯಾವ ಅಪರಾಧವನ್ನು ಮಾಡಿದ್ದೇನೆ? ನೀನು
ನನ್ನನ್ನು ಸೆರೆಮನೆಯಲ್ಲಿ ಏಕೆ ಹಾಕಿರುವೆ? 19ರಾಜನಾದ
ಚಿದ್ಕೀಯನೇ, ನಿನ್ನ ಪ್ರವಾದಿಗಳು ಈಗ ಎಲ್ಲಿದ್ದಾರೆ? ಆ
ಪ್ರವಾದಿಗಳು ನಿನಗೆ ಸುಳ್ಳುಪ್ರವಾದನೆಯನ್ನು ಮಾಡಿ
ದರು. 'ಬಾಬಿಲೋನಿನ ರಾಜನು ನಿನ್ನ ಮೇಲಾಗಲಿ
ಅಥವಾ ಈ ಯೆಹೂದ ಪ್ರದೇಶದ ಮೇಲಾಗಲಿ ಧಾಳಿ
ಮಾಡುವದಿಲ್ಲ' ಎಂದು ಅವರು ಹೇಳಿದ್ದರು.

20ಆದರೆ ಯೆಹೂದದ ರಾಜನಾದ ಚಿದ್ಕೀಯನೇ,
ದಯವಿಟ್ಟು ನಾನು ಹೇಳುವದನ್ನು ಕೇಳು. ನನ್ನ
ಕೋರಿಕೆಯನ್ನು ದಯವಿಟ್ಟು ಕೇಳು. ನನ್ನನ್ನು
ಲಿಪಿಕಾರನಾದ ಯೆಹೋ ನಾಥಾನನ ಮನೆಗೆ ತಿರುಗಿ
ಕಳುಹಿಸಬೇಡ. ಇದೇ ನನ್ನ ಬೇಡಿಕೆ. ನೀನು ನನ್ನನ್ನು ಮತ್ತೆ
ಅಲ್ಲಿಗೆ ಕಳುಹಿಸಿದರೆ ನಾನು ಅಲ್ಲಿ ಸತ್ತು ಹೋಗುತ್ತೇನೆ''
ಎಂದನು.

21ಆಗ ರಾಜನಾದ ಚಿದ್ಕೀಯನು ಯೆರೆಮೀಯನನ್ನು
ಕಾರಾಗೃಹದ ಅಂಗಳದಲ್ಲಿಡಬೇಕೆಂದು ಮತ್ತು ಅವನಿಗೆ
ಪೇಟೆಯಿಂದ ರೊಟ್ಟಿಯನ್ನು ತಂದುಕೊಡಬೇಕೆಂದು
ಚಿದ್ಕೀಯನು ಆಜ್ಞೆ ಮಾಡಿದನು. ನಗರದಲ್ಲಿ ರೊಟ್ಟಿ
ಇರುವವರೆಗೆ ಯೆರೆಮೀಯನಿಗೆ ರೊಟ್ಟಿಯನ್ನು ಕೊಡ
ಲಾಯಿತು. ಹೀಗೆ ಯೆರೆಮೀಯನು ಕಾರಾಗೃಹದ
ಅಂಗಳದಲ್ಲಿ ಬಂದಿಯಾಗಿದ್ದನು.

## ಯೆರೆಮೀಯನನ್ನು ಒಂದು ಬಾವಿಯಲ್ಲಿ ಹಾಕಲಾಯಿತು

38 ಯೆರೆಮೀಯನು ಪ್ರವಾದಿಸುತ್ತಿರುವುದನ್ನು
ಕೆಲವು ಜನ ರಾಜಾಧಿಕಾರಿಗಳು ಕೇಳಿಸಿ
ಕೊಂಡರು. ಮತ್ತಾನನ ಮಗನಾದ ಶೆಫತ್ಯ, ಪಷ್ಹೂರನ
ಮಗನಾದ ಗೆದಲ್ಯ, ಸೆಲೆಮ್ಯನ ಮಗನಾದ ಯೂಕಲ,
ಮಲ್ಕೀಯನ ಮಗನಾದ ಪಷ್ಹೂರ ಇವರುಗಳು ಅವನ
ಮಾತನ್ನೆಲ್ಲಾ ಕೇಳಿಸಿಕೊಂಡರು. ಯೆರೆಮೀಯನು ಎಲ್ಲಾ
ಜನರಿಗೆ ಈ ಸಂದೇಶವನ್ನು ಹೇಳುತ್ತಿದ್ದನು. 2''ಯೆಹೋ
ವನು ಇಂತೆನ್ನುತ್ತಾನೆ: 'ಜೆರುಸಲೇಮಿನಲ್ಲಿರುವ ಪ್ರತಿ
ಯೊಬ್ಬರು ಖಡ್ಗದಿಂದಾಗಲೀ ಕ್ಷಾಮದಿಂದಾಗಲೀ
ಭಯಂಕರವಾದ ವ್ಯಾಧಿಯಿಂದಾಗಲೀ ಸತ್ತುಹೋಗು
ವರು. ಆದರೆ ಬಾಬಿಲೋನಿನ ಸೈನಿಕರಿಗೆ ಶರಣಾಗುವ
ಪ್ರತಿಯೊಬ್ಬರು ಬದುಕುವರು. ಅವರು ಜೀವಂತ ಉಳಿ
ಯುವರು.' 3ಯೆಹೋವನು ಇಂತೆನ್ನುತ್ತಾನೆ: 'ಈ ಜೆರುಸ
ಲೇಮ್ ನಗರವನ್ನು ಖಂಡಿತವಾಗಿಯೂ ಬಾಬಿಲೋನ್
ರಾಜನ ಸೈನಿಕರ ಕೈಗೆ ಒಪ್ಪಿಸಲಾಗುವುದು. ಅವನು ಈ
ನಗರವನ್ನು ಸ್ವಾಧೀನಪಡಿಸಿಕೊಳ್ಳುವನು.'''

4ಯೆರೆಮೀಯನು ಜನರಿಗೆ ಹೇಳುತ್ತಿರುವ ವಿಷಯ
ಗಳನ್ನು ಕೇಳಿದ ರಾಜಾಧಿಕಾರಿಗಳು ರಾಜನಾದ ಚಿದ್ಕೀ
ಯನ ಬಳಿಗೆ ಹೋಗಿ, ''ಯೆರೆಮೀಯನಿಗೆ ಮರಣ
ದಂಡನೆಯಾಗಬೇಕು. ಇನ್ನೂ ನಗರದಲ್ಲಿರುವ ಸೆನಿಕ
ರನ್ನೂ ಎಲ್ಲರನ್ನೂ ತನ್ನ ಮಾತುಗಳಿಂದ ಧೈರ್ಯಗೆಡಿಸು
ತ್ತಿದ್ದಾನೆ. ನಮಗೆ ಒಳ್ಳೆಯದಾಗಬೇಕೆಂದು ಅವನು ಬಯ
ಸದೆ ಜೆರುಸಲೇಮಿನ ಜನರ ನಾಶನವನ್ನು ಬಯಸು
ತ್ತಾನೆ'' ಎಂದು ಹೇಳಿದರು.

5ಆಗ ರಾಜನಾದ ಚಿದ್ಕೀಯನು, ''ಯೆರೆಮೀಯನು
ನಿಮ್ಮ ಅಧೀನದಲ್ಲಿದ್ದಾನೆ. ನೀವು ಏನು ಬೇಕಾದರೂ
ಮಾಡಿ'' ಎಂದು ಆ ಅಧಿಕಾರಿಗಳಿಗೆ ಹೇಳಿದನು.

6ಆಗ ಆ ಅಧಿಕಾರಿಗಳು ಯೆರೆಮೀಯನನ್ನು ಹಿಡಿದು
ಮಲ್ಕೀಯನ ಬಾವಿಯೊಳಗೆ ಹಾಕಿದರು. (ಮಲ್ಕೀಯನು
ರಾಜವಂಶದವನಾಗಿದ್ದನು.) ಆ ಬಾವಿಯು ಕಾರಾ ಗೃಹದ
ಅಂಗಳದಲ್ಲಿತ್ತು. ಆ ಅಧಿಕಾರಿಗಳು ಹಗ್ಗಗಳನ್ನು ಕಟ್ಟಿ
ಯೆರೆಮೀಯನನ್ನು ಬಾವಿಯಲ್ಲಿ ಇಳಿಬಿಟ್ಟರು. ಆ
ಬಾವಿಯಲ್ಲಿ ಸ್ವಲ್ಪವೂ ನೀರಿರಲಿಲ್ಲ. ಕೇವಲ ಕೆಸರಿತ್ತು.
ಯೆರೆಮೀಯನು ಕೆಸರಿನಲ್ಲಿ ಮುಳುಗಿಹೋದನು.

7ಆ ಅಧಿಕಾರಿಗಳು ಯೆರೆಮೀಯನನ್ನು ಬಾವಿಗೆ
ಹಾಕಿದ ಸಂಗತಿಯು ಎಬೆದ್ಮೆಲೆಕನೆಂಬ ಮನುಷ್ಯನ ಕಿವಿಗೆ
ಬಿತ್ತು. ಎಬೆದ್ಮೆಲೆಕನು ಇಥಿಯೋಪಿಯದವನಾಗಿದ್ದು
ಅರಮನೆಯಲ್ಲಿ ಕಂಚುಕಿಯಾಗಿದ್ದನು. ರಾಜನಾದ ಚಿದ್ಕೀ
ಯನು ಬೆನ್ಯಾಮೀನ್ ಊರಬಾಗಲಲ್ಲಿ ಕುಳಿತಿದ್ದನು.
ಎಬೆದ್ಮೆಲೆಕನು ಅರಮನೆಯನ್ನು ಬಿಟ್ಟು ಬೆನ್ಯಾಮೀನ್

ಊರಹೆಬ್ಬಾಗಿಲಿನ ಹತ್ತಿರ ಕುಳಿತಿದ್ದ ರಾಜನಾದ
ಚಿದ್ಕೀಯನ ಹತ್ತಿರ ಬಂದು ಹೀಗೆ ಹೇಳಿದನು, [8-9]“ನನ್ನ
ಒಡೆಯನಾದ ರಾಜನೇ, ಆ ಅಧಿಕಾರಿಗಳು ದುಷ್ಟ ರೀತಿ
ಯಲ್ಲಿ ವರ್ತಿಸಿದ್ದಾರೆ. ಅವರು ಪ್ರವಾದಿಯಾದ ಯೆರೆಮೀ
ಯನೊಂದಿಗೆ ದುಷ್ಟತನದಿಂದ ವ್ಯವಹರಿಸಿದ್ದಾರೆ. ಅವರು
ಅವನನ್ನು ಒಂದು ಭಾವಿಯಲ್ಲಿ ಎಸೆದಿದ್ದಾರೆ. ಅವನನ್ನು
ಅಲ್ಲಿಯೇ ಸಾಯಲು ಬಿಟ್ಟಿದ್ದಾರೆ” ಎಂದು ಹೇಳಿದನು.
[10]ಆಗ ರಾಜನಾದ ಚಿದ್ಕೀಯನು ಇಥಿಯೋಪಿಯದವ
ನಾದ ಎಬೆದ್ಮೆಲೆಕನಿಗೆ, “ಅರಮನೆಯಿಂದ ಮೂರು ಜನ
ರನ್ನು ನಿನ್ನ ಸಂಗಡ ಕರೆದುಕೊಂಡು ಹೋಗು. ಯೆರೆ
ಮೀಯನನ್ನು ಅವನು ಸಾಯುವ ಮುಂಚೆ ಬಾವಿಯಿಂದ
ಮೇಲೆತ್ತು” ಎಂದು ಅಪ್ಪಣೆಕೊಟ್ಟನು.
[11]ಎಬೆದ್ಮೆಲೆಕನು ಆ ಜನರನ್ನು ಕರೆದುಕೊಂಡು ಹೊರ
ಟನು. ಅವನು ಮೊದಲು ಅರಮನೆಯ ಉಗ್ರಾಣದ
ಕೆಳಗಿರುವ ಕೋಣೆಗೆ ಹೋದನು. ಆ ಕೋಣೆಯಿಂದ
ಅವನು ಕೆಲವು ಹಳೆಯದಾದ ಮತ್ತು ಹರಿದುಹೋದ
ಬಟ್ಟೆಗಳನ್ನು ತೆಗೆದುಕೊಂಡನು. ಆ ಚಿಂದಿ ಬಟ್ಟೆಗಳನ್ನು
ಒಂದು ಹಗ್ಗಕ್ಕೆ ಕಟ್ಟಿ ಆಳವಾದ ಬಾವಿಯಲ್ಲಿ ಯೆರೆಮೀ
ಯನಿಗೆ ತಲುಪುವಂತೆ ಇಳಿಬಿಟ್ಟನು. [12]ಆಗ ಇಥಿಯೋಪಿ
ಯದವನಾದ ಎಬೆದ್ಮೆಲೆಕನು, “ಆ ಹರಿದುಹೋದ
ಮತ್ತು ಹಳೆಯದಾದ ಬಟ್ಟೆಗಳನ್ನು ನಿನ್ನ ಕಂಕುಳಲ್ಲಿ
ಇಟ್ಟುಕೋ. ನಾವು ನಿನ್ನನ್ನು ಮೇಲಕ್ಕೆಳೆಯುವಾಗ ನಿನ್ನ
ಕಂಕುಳಿಗೆ ಹಗ್ಗಗಳಿಂದ ಗಾಯಗಳಾಗುವದಿಲ್ಲ”
ಎಂದನು. ಯೆರೆಮೀಯನು ಎಬೆದ್ಮೆಲೆಕನು ಹೇಳಿದಂತೆ
ಮಾಡಿದನು. [13]ಅವರು ಯೆರೆಮೀಯನನ್ನು ಹಗ್ಗದಿಂದ
ಮೇಲಕ್ಕೆ ಎಳೆದು ಬಾವಿಯಿಂದ ಹೊರತೆಗೆದರು. ಯೆರೆ
ಮೀಯನು ಕಾರಾಗೃಹದ ಅಂಗಳದಲ್ಲಿ ವಾಸಿಸಿದನು.

### ಚಿದ್ಕೀಯನು ಯೆರೆಮೀಯನಿಗೆ ಕೆಲವು ಪ್ರಶ್ನೆಗಳನ್ನು ಕೇಳಿದ್ದು

[14]ರಾಜನಾದ ಚಿದ್ಕೀಯನು ಪ್ರವಾದಿಯಾದ ಯೆರೆ
ಮೀಯನನ್ನು ಒಬ್ಬನ ಮೂಲಕ ಯೆಹೋವನ ಆಲಯದ
ಮೂರನೇ ಪ್ರವೇಶದ್ವಾರಕ್ಕೆ ಕರೆಸಿದನು. ರಾಜನು
ಅವನಿಗೆ, “ಯೆರೆಮೀಯನೇ, ನಾನು ನಿನಗೆ ಒಂದು
ವಿಷಯವನ್ನು ಕೇಳಲಿದ್ದೇನೆ. ನನ್ನಿಂದ ಏನನ್ನೂ ಮುಚ್ಚಿಡ
ಬೇಡ. ಎಲ್ಲವನ್ನು ಪ್ರಾಮಾಣಿಕವಾಗಿ ನನಗೆ ಹೇಳು”
ಎಂದನು.
[15]ಅದಕ್ಕೆ ಯೆರೆಮೀಯನು, “ನಾನು ಉತ್ತರಕೊಟ್ಟರೆ
ನೀನು ಬಹುಶಃ ನನ್ನನ್ನು ಕೊಂದುಬಿಡುವೆ, ಸಲಹೆ
ಕೊಟ್ಟರೆ ನೀನು ನನ್ನ ಮಾತುಗಳನ್ನು ಕಿವಿಗೆ ಹಾಕಿ
ಕೊಳ್ಳುವದಿಲ್ಲ” ಎಂದು ಹೇಳಿದನು.
[16]ಆದರೆ ರಾಜನಾದ ಚಿದ್ಕೀಯನು ಯೆರೆಮೀಯನಿಗೆ
ರಹಸ್ಯವಾಗಿ, “ಯೆರೆಮೀಯನೇ, ನಮಗೆ ಉಸಿರನ್ನೂ
ಜೀವನವನ್ನೂ ದಯಪಾಲಿಸಿದ ಯೆಹೋವನ ಆಣೆ
ಯಾಗಿ ಹೇಳುತ್ತೇನೆ, ನಾನು ನಿನ್ನನ್ನು ಕೊಲ್ಲುವುದಿಲ್ಲ.
ಕೊಲ್ಲಬಯಸುವ ಅಧಿಕಾರಿಗಳ ಕೈಗೂ ನಿನ್ನನ್ನು
ಕೊಡುವದಿಲ್ಲವೆಂದು ನಾನು ಮಾತುಕೊಡುತ್ತೇನೆ”
ಎಂದು ಹೇಳಿದನು.
[17]ಆಗ ಯೆರೆಮೀಯನು ರಾಜನಾದ ಚಿದ್ಕೀಯನಿಗೆ
ಹೀಗೆಂದನು: “ಇಸ್ರೇಲರ ದೇವರಾದ ಮತ್ತು ಸರ್ವಶಕ್ತ
ನಾದ ಯೆಹೋವನು ಹೀಗೆನ್ನುತ್ತಾನೆ: ‘ನೀನು ಬಾಬಿ
ಲೋನಿನ ರಾಜನ ಅಧಿಕಾರಿಗಳಿಗೆ ಶರಣಾಗತನಾದರೆ
ನಿನ್ನ ಪ್ರಾಣವನ್ನು ಉಳಿಸಲಾಗುವುದು ಮತ್ತು ಜೆರುಸ
ಲೇಮ್ ನಗರವನ್ನು ಸುಟ್ಟುಹಾಕಲಾಗುವುದಿಲ್ಲ. ನೀನೂ
ಬದುಕುವೆ ಮತ್ತು ನಿನ್ನ ಕುಟುಂಬದವರೂ ಬದುಕುವರು.
[18]ಆದರೆ ನೀನು ಬಾಬಿಲೋನಿನ ಅಧಿಕಾರಿಗಳಿಗೆ ಶರಣಾ
ಗತನಾಗಲು ಒಪ್ಪದಿದ್ದರೆ, ಜೆರುಸಲೇಮನ್ನು ಬಾಬಿಲೋ
ನಿನ ಸೈನಿಕರಿಗೆ ಒಪ್ಪಿಸಲಾಗುವುದು. ಅವರು ಜೆರುಸಲೇ
ಮನ್ನು ಸುಟ್ಟುಬಿಡುವರು ಮತ್ತು ನೀನು ಸಹ ಅವರಿಂದ
ತಪ್ಪಿಸಿಕೊಳ್ಳಲಾಗುವುದಿಲ್ಲ.’”
[19]ಆಗ ಚಿದ್ಕೀಯನು “ನಾನು ಈಗಾಗಲೇ ಬಾಬಿಲೋ
ನಿನ ಸೈನ್ಯದ ಕಡೆಗೆ ಸೇರಿದ ಯೆಹೂದ್ಯರಿಗೆ ಹೆದರುತ್ತೇನೆ.
ಆ ಸೈನಿಕರು ನನ್ನನ್ನು ಯೆಹೂದದ ಆ ಜನರಿಗೆ ಒಪ್ಪಿಸಿ
ಕೊಡಬಹುದು ಮತ್ತು ಅವರು ನನಗೆ ಕೇಡು ಮಾಡ
ಬಹುದು; ನನ್ನನ್ನು ಹಿಂಸಿಸಬಹುದು ಎಂದು ಭಯ
ವಾಗುತ್ತದೆ” ಎಂದು ಯೆರೆಮೀಯನಿಗೆ ಹೇಳಿದನು.
[20]ಆದರೆ ಯೆರೆಮೀಯನು “ರಾಜನಾದ ಚಿದ್ಕೀ
ಯನೇ, ಆ ಸೈನಿಕರು ನಿನ್ನನ್ನು ಯೆಹೂದದ ಆ ಜನರಿಗೆ
ಒಪ್ಪಿಸುವುದಿಲ್ಲ. ನಾನು ಹೇಳಿದಂತೆ ಮಾಡಿ ಯೆಹೋವನ
ಆಜ್ಞಾಪಾಲನೆ ಮಾಡು. ಆಗ ನಿನಗೆಲ್ಲ ಒಳ್ಳೆಯದಾಗು
ವುದು ಮತ್ತು ನಿನ್ನ ಪ್ರಾಣ ಉಳಿಯುವುದು. [21]ನೀನು
ಬಾಬಿಲೋನಿನ ಸೈನಿಕರಿಗೆ ಶರಣಾಗತನಾಗದಿದ್ದರೆ
ಏನಾಗುವದೆಂಬುದನ್ನು ಯೆಹೋವನು ನನಗೆ ತೋರಿಸಿ
ಕೊಟ್ಟಿದ್ದಾನೆ. ಯೆಹೋವನು ನನಗೆ ಹೀಗೆ ಹೇಳಿದ್ದಾನೆ:
[22]ಯೆಹೂದದ ರಾಜನ ಅರಮನೆಯಲ್ಲಿ ಉಳಿದ ಎಲ್ಲಾ
ಸ್ತ್ರೀಯರನ್ನು ಬಾಬಿಲೋನಿನ ಸೈನ್ಯಾಧಿಕಾರಿಗಳ ಬಳಿಗೆ
ತರಲಾಗುವುದು. ನಿನ್ನ ಸ್ತ್ರೀಯರು ಹಾಡನ್ನು ಹಾಡಿ
ನಿನ್ನನ್ನು ತಮಾಷೆ ಮಾಡುವರು. ಆ ಸ್ತ್ರೀಯರು ಹೀಗೆ
ಹೇಳುವರು:

ನಿನಗಿಂತಲೂ ಪ್ರಬಲರಾಗಿದ್ದ ನಿನ್ನ ಒಳ್ಳೆಯ ಸ್ನೇಹಿ
ತರು ನಿನ್ನನ್ನು ತಪ್ಪುದಾರಿಗೆ ಎಳೆದರು. ಆ ಸ್ನೇಹಿತ
ರನ್ನು ನೀನು ತುಂಬಾ ನಂಬಿಕೊಂಡಿದ್ದೆ. ನಿನ್ನ

ಪಾದಗಳು ಕೆಸರಿನಲ್ಲಿ ಹೂತಿವೆ. ನಿನ್ನ ಸ್ನೇಹಿತರು
ನಿನ್ನಿಂದ ದೂರವಾಗಿದ್ದಾರೆ.

23‘‘ನಿನ್ನ ಎಲ್ಲಾ ಹೆಂಡತಿಯರನ್ನು ಮತ್ತು ಮಕ್ಕಳನ್ನು ಹೊರತರಲಾಗುವುದು. ಅವರನ್ನು ಬಾಬಿಲೋನಿನ ಸೈನಿಕರಿಗೆ ಒಪ್ಪಿಸಲಾಗುವುದು. ನೀನೂ ಬಾಬಿಲೋನಿನ ಸೈನಿಕರಿಂದ ತಪ್ಪಿಸಿಕೊಳ್ಳಲಾರೆ. ಬಾಬಿಲೋನಿನ ರಾಜನು ನಿನ್ನನ್ನು ವಶಪಡಿಸಿಕೊಳ್ಳುವನು ಮತ್ತು ಜೆರುಸಲೇಮ್ ನಗರವನ್ನು ಸುಟ್ಟುಹಾಕಲಾಗುವುದು’’ ಎಂದು ಉತ್ತರಿಸಿದನು.
24ಆಗ ಚಿದ್ಕೀಯನು ಯೆರೆಮೀಯನಿಗೆ ಹೀಗೆ ಹೇಳಿದನು: ‘‘ನಾನು ನಿನ್ನ ಸಂಗಡ ಮಾತನಾಡುತ್ತಿದ್ದೆ ಎಂದು ಯಾರಿಗೂ ಹೇಳಬೇಡ. ಇಲ್ಲವಾದರೆ ನೀನು ಸಾಯುವೆ.
25ನಾನು ನಿನ್ನೊಂದಿಗೆ ಮಾತನಾಡಿದ್ದನ್ನು ಆ ಅಧಿಕಾರಿಗಳು ಪತ್ತೆ ಹಚ್ಚಬಹುದು. ಅವರು ನಿನ್ನ ಹತ್ತಿರ ಬಂದು, ‘ಯೆರೆಮೀಯನೇ, ನೀನು ರಾಜನಾದ ಚಿದ್ಕೀಯನಿಗೆ ಏನು ಹೇಳಿದೆ? ಚಿದ್ಕೀಯನು ನಿನಗೆ ಏನು ಹೇಳಿದನು? ಪ್ರಾಮಾಣಿಕವಾಗಿ ಎಲ್ಲವನ್ನು ನಮಗೆ ಹೇಳು; ಇಲ್ಲವಾದರೆ ನಾವು ನಿನ್ನನ್ನು ಕೊಂದುಬಿಡುತ್ತೇವೆ’ ಎನ್ನಬಹುದು.
26ಆಗ ನೀನು ಅವರಿಗೆ, ‘ಯೆಹೋನಾಥಾನನ ಮನೆಯ ನೆಲಮಾಳಿಗೆಯ ಕತ್ತಲು ಕೋಣೆಗೆ ನನ್ನನ್ನು ಮತ್ತೆ ಕಳುಹಿಸಬೇಡಿ, ಅಲ್ಲಿಗೆ ಹೋದರೆ ನಾನು ಸತ್ತು ಹೋಗುವೆನೆಂದು ರಾಜನಿಗೆ ಪ್ರಾರ್ಥಿಸುತ್ತಿದ್ದೆ’’’ ಎಂದು ಹೇಳು.
27ಆ ರಾಜ್ಯಾಧಿಕಾರಿಗಳು ಅವನನ್ನು ಪ್ರಶ್ನಿಸುವದಕ್ಕಾಗಿ ಯೆರೆಮೀಯನಲ್ಲಿಗೆ ಬಂದರು. ರಾಜನು ಆಜ್ಞಾಪಿಸಿದಂತೆ ಯೆರೆಮೀಯನು ಅವರಿಗೆ ಎಲ್ಲವನ್ನು ಹೇಳಿದನು. ಆಗ ಆ ಅಧಿಕಾರಿಗಳು ಯೆರೆಮೀಯನನ್ನು ಬಿಟ್ಟು ಹೋದರು. ಯೆರೆಮೀಯನ ಮತ್ತು ರಾಜನ ಸಂಭಾಷಣೆಯನ್ನು ಯಾರೂ ಕೇಳಿರಲಿಲ್ಲ.
28ಜೆರುಸಲೇಮ್ ನಗರವು ಶತ್ರುಗಳ ವಶವಾಗುವವರೆಗೆ ಯೆರೆಮೀಯನು ಕಾರಾಗೃಹದ ಅಂಗಳದಲ್ಲಿ ವಾಸ ಮಾಡಿಕೊಂಡಿದ್ದನು.

### ಜೆರುಸಲೇಮಿನ ಪತನ

39 ಜೆರುಸಲೇಮನ್ನು ಹೀಗೆ ವಶಪಡಿಸಿಕೊಳ್ಳಲಾಯಿತು: ಚಿದ್ಕೀಯನು ಯೆಹೂದದ ರಾಜನಾಗಿ ಆಳುತ್ತಿದ್ದ ಒಂಭತ್ತನೇ ವರ್ಷದ ಹತ್ತನೆಯ ತಿಂಗಳಿನಲ್ಲಿ ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನು ತನ್ನ ಇಡೀ ಸೈನ್ಯದೊಂದಿಗೆ ಜೆರುಸಲೇಮಿನ ಮೇಲೆ ಧಾಳಿ ಮಾಡಿದನು. ಅದನ್ನು ವಶಪಡಿಸಿಕೊಳ್ಳುವದಕ್ಕಾಗಿ ಅವನು ಆ ನಗರವನ್ನು ಮುತ್ತಿದನು.
2ಚಿದ್ಕೀಯನ ಆಳ್ವಿಕೆಯ ಹನ್ನೊಂದನೆ ವರ್ಷದ ನಾಲ್ಕನೆಯ ತಿಂಗಳಿನ ಒಂಭತ್ತನೇ ದಿನದಂದು ಜೆರುಸಲೇಮಿನ ಪೌಳಿಗೋಡೆಯನ್ನು ಒಡೆಯಲಾಯಿತು.
3ಆಗ ಬಾಬಿಲೋನಿನ ಎಲ್ಲಾ ರಾಜ್ಯಾಧಿಕಾರಿಗಳು ಜೆರುಸಲೇಮ್ ನಗರವನ್ನು ಪ್ರವೇಶಿಸಿದರು. ಅವರು ಒಳಗೆ ಬಂದು ಮಧ್ಯ ದ್ವಾರದಲ್ಲಿ ಕುಳಿತುಕೊಂಡರು. ಅವರು ಯಾರಂದರೆ: ಸಮ್ಗರ್‌ನೆಬೋದದ ಅಧಿಪತಿಯಾದ ನೇರ್ಗಲ್ ಸರೆಚರ್; ಇನ್ನೊಬ್ಬ ದೊಡ್ಡ ಅಧಿಕಾರಿಯಾದ ಸೆರ್ಸೆಕೀಮ್ ಮತ್ತು ಬೇರೆ ಬೇರೆ ದೊಡ್ಡ ಅಧಿಕಾರಿಗಳು ಕೂಡ ಅಲ್ಲಿದ್ದರು.
4ಯೆಹೂದದ ರಾಜನಾದ ಚಿದ್ಕೀಯನು ಬಾಬಿಲೋನಿನ ಆ ಅಧಿಕಾರಿಗಳನ್ನು ನೋಡಿದನು. ಅವನು ಮತ್ತು ಅವನ ಜೊತೆಗಿದ್ದ ಸೈನಿಕರು ಓಡಿಹೋದರು. ಅವರು ರಾತ್ರಿಯಲ್ಲಿ ಜೆರುಸಲೇಮ್ ನಗರವನ್ನು ಬಿಟ್ಟು ರಾಜನ ಉದ್ಯಾನದ ಮಾರ್ಗವಾಗಿ ಹೊರಗೆ ಹೋದರು. ಅವರು ಎರಡು ಗೋಡೆಗಳ ಮಧ್ಯದಲ್ಲಿದ್ದ ಬಾಗಿಲಿನಿಂದ ಹೊರಗೆ ಬಂದು ಮರುಭೂಮಿಯ ಕಡೆಗೆ ಹೊರಟರು.
5ಆದರೆ ಬಾಬಿಲೋನಿನ ಸೈನಿಕರು ಚಿದ್ಕೀಯ ಮತ್ತು ಅವನ ಸೈನಿಕರನ್ನು ಬೆನ್ನಟ್ಟಿದರು. ಕಸ್ದೀಯರ ಸೈನಿಕರು ಯೆರಿಕೋವಿನ ಬಯಲಿನಲ್ಲಿ ಚಿದ್ಕೀಯನನ್ನು ಬಂಧಿಸಿ ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನಲ್ಲಿಗೆ ತೆಗೆದುಕೊಂಡು ಹೋದರು. ಆಗ ನೆಬೂಕದ್ನೆಚ್ಚರನು ಹಮಾತ್ ಸೀಮೆಯ ‘ರಿಬ್ಲ’ದಲ್ಲಿದ್ದನು. ಆ ಸ್ಥಳದಲ್ಲಿಯೇ ನೆಬೂಕದ್ನೆಚ್ಚರನು ಚಿದ್ಕೀಯನ ಬಗ್ಗೆ ತನ್ನ ನಿರ್ಣಯವನ್ನು ಪ್ರಕಟಿಸಿದನು.
6ರಿಬ್ಲದಲ್ಲಿ ಬಾಬಿಲೋನಿನ ರಾಜನು ಚಿದ್ಕೀಯನ ಕಣ್ಣೆದುರಿನಲ್ಲಿಯೇ ಅವನ ಗಂಡು ಮಕ್ಕಳನ್ನು ಕೊಲ್ಲಿಸಿದನು. ಚಿದ್ಕೀಯನು ನೋಡುತ್ತಿದ್ದಂತೆಯೇ ನೆಬೂಕದ್ನೆಚ್ಚರನು ಯೆಹೂದದ ಎಲ್ಲಾ ರಾಜಾಧಿಕಾರಿಗಳನ್ನು ಕೊಲ್ಲಿಸಿದನು.
7ಅನಂತರ ನೆಬೂಕದ್ನೆಚ್ಚರನು ಚಿದ್ಕೀಯನ ಕಣ್ಣುಗಳನ್ನು ಕೀಳಿಸಿದನು. ಕಂಚಿನ ಸರಪಳಿಗಳಿಂದ ಬಿಗಿಸಿ ಚಿದ್ಕೀಯನನ್ನು ಬಾಬಿಲೋನಿಗೆ ತೆಗೆದುಕೊಂಡು ಹೋದನು.
8ಬಾಬಿಲೋನಿನ ಸೈನಿಕರು ಅರಮನೆಗೂ ಮತ್ತು ಜೆರುಸಲೇಮಿನ ಉಳಿದ ನಿವಾಸಿಗಳ ಮನೆಗಳಿಗೂ ಬೆಂಕಿಯಿಟ್ಟರು. ಜೆರುಸಲೇಮಿನ ಗೋಡೆಗಳನ್ನು ಕೆಡವಿದರು.
9ಬಾಬಿಲೋನಿನ ರಾಜನ ವಿಶೇಷ ರಕ್ಷಕದಳದ ಅಧಿಪತಿಯಾದ ನೆಬೂಜರದಾನನೆಂಬವನು ಜೆರುಸಲೇಮಿನಲ್ಲಿ ಉಳಿದ ಜನರನ್ನು ಹಿಡಿದು ಬಂದಿಗಳನ್ನಾಗಿ ಮಾಡಿದ್ದನು. ಅವರನ್ನು ಅವನು ಬಾಬಿಲೋನಿಗೆ ತೆಗೆದುಕೊಂಡು ಹೋದನು. ಈ ಮೊದಲೆ ಅವನಿಗೆ ಶರಣಾಗತರಾದವರನ್ನೂ ಸಹ ನೆಬೂಜರದಾನನು ಬಂದಿಗಳನ್ನಾಗಿ ಮಾಡಿದನು. ಅವನು ಜೆರುಸಲೇಮಿನ ಉಳಿದವರೆಲ್ಲರನ್ನು ಬಂದಿಗಳನ್ನಾಗಿ ಮಾಡಿ ಬಾಬಿಲೋನಿಗೆ ತೆಗೆದುಕೊಂಡು

ಹೋದನು. 10ಆದರೆ ಬಾಬಿಲೋನ್ ರಾಜನ ವಿಶೇಷ
ರಕ್ಷಕದಳದ ಅಧಿಪತಿಯಾದ ನೆಬೂಜರದಾನನು
ಯೆಹೂದದ ಕೆಲ ಬಡಜನರನ್ನು ಅಲ್ಲಿಯೇ ಬಿಟ್ಟನು. ಆ
ಜನಗಳಿಗೆ ಯಾವ ಆಸ್ತಿಪಾಸ್ತಿ ಇದ್ದಿರಲಿಲ್ಲ. ಆದುದರಿಂದ
ಅಂದು ನೆಬೂಜರದಾನನು ಯೆಹೂದದ ಆ ಬಡಜನರಿಗೆ
ದ್ರಾಕ್ಷಿತೋಟಗಳನ್ನು ಮತ್ತು ಹೊಲಗಳನ್ನು ಕೊಟ್ಟನು.
11ನೆಬೂಕದ್ನೆಚ್ಚರನು ನೆಬೂಜರದಾನನಿಗೆ ಯೆರೆಮೀ
ಯನ ಬಗ್ಗೆ ಕೆಲವು ಆಜ್ಞೆಗಳನ್ನು ಕೊಟ್ಟನು. ನೆಬೂಜರ
ದಾನನು ನೆಬೂಕದ್ನೆಚ್ಚರನ ವಿಶೇಷ ರಕ್ಷಕದಳದ ಅಧಿಪತಿ
ಯಾಗಿದ್ದನು. ಆಜ್ಞೆ ಹೀಗಿತ್ತು: 12“ಯೆರೆಮೀಯನನ್ನು
ಪತ್ತೆ ಹಚ್ಚಿ ಅವನ ಕ್ಷೇಮದ ಬಗ್ಗೆ ಎಚ್ಚರಿಕೆ ವಹಿಸಿರಿ.
ಅವನಿಗೆ ನೋವಾಗದಂತೆ ನೋಡಿಕೊಳ್ಳಿ. ಅವನು
ಕೇಳಿದ್ದನ್ನೆಲ್ಲ ಕೊಡಿ.”
13ರಾಜನ ವಿಶೇಷ ರಕ್ಷಕದಳದ ಅಧಿಪತಿಯಾದ
ನೆಬೂಜರದಾನ್, ಬಾಬಿಲೋನಿನ ಸೈನ್ಯದ ಒಬ್ಬ ಮುಖ್ಯ
ಅಧಿಕಾರಿಯಾದ ನೆಬೂಷಜ್ಬಾನ್, ದೊಡ್ಡ ಅಧಿಕಾರಿ
ಯಾದ ನೇರ್ಗಲ್ ಸರೆಚರ್ ಮತ್ತು ಬಾಬಿಲೋನಿನ
ಇನ್ನುಳಿದ ಸೈನ್ಯಾಧಿಕಾರಿಗಳು ಯೆರೆಮೀಯನನ್ನು ಹುಡು
ಕಲು ಜನರನ್ನು ಕಳುಹಿಸಿದರು. 14ಅವರು ಯೆರೆಮೀಯ
ನನ್ನು ಕಾರಾಗೃಹದ ಅಂಗಳದಿಂದ ಹೊರಗೆ ಕರೆದು
ತಂದರು. ಬಾಬಿಲೋನಿನ ಆ ಸೈನ್ಯಾಧಿಕಾರಿಗಳು
ಯೆರೆಮೀಯನನ್ನು ಗೆದಲ್ಯನ ವಶಕ್ಕೆ ಕೊಟ್ಟರು.
ಗೆದಲ್ಯನು ಅಹೀಕಾಮನ ಮಗ ಮತ್ತು ಅಹೀಕಾಮನು
ಶಾಫಾನನ ಮಗನಾಗಿದ್ದನು. ಯೆರೆಮೀಯನನ್ನು ಮನೆಗೆ
ಕರೆದುಕೊಂಡು ಹೋಗಬೇಕೆಂದು ಗೆದಲ್ಯನಿಗೆ ಆಜ್ಞಾ
ಪಿಸಲಾಯಿತು. ಆದರಂತೆ ಯೆರೆಮೀಯನನ್ನು ಮನೆಗೆ
ಕರೆದುಕೊಂಡು ಹೋಗಲಾಯಿತು; ಅವನು ತನ್ನ ಜನ
ರೊಂದಿಗೆ ವಾಸಿಸತೊಡಗಿದನು.

### ಎಬೆದ್ಮೆಲೆಕನಿಗೆ ಯೆಹೋವನಿಂದ ಒಂದು ಸಂದೇಶ

15ಯೆರೆಮೀಯನು ಕಾರಾಗೃಹದ ಅಂಗಳದಲ್ಲಿ ಬಂದಿ
ಯಾಗಿದ್ದಾಗ ಯೆಹೋವನಿಂದ ಅವನಿಗೊಂದು ಸಂದೇಶ
ಬಂದಿತು. ಆ ಸಂದೇಶ ಹೀಗಿತ್ತು. 16“ಯೆರೆಮೀಯನೇ,
ಹೋಗಿ ಇಥಿಯೋಪಿಯದವನಾದ ಎಬೆದ್ಮೆಲೆಕನಿಗೆ ಈ
ಸಂದೇಶವನ್ನು ಕೊಡು: ‘ಇಸ್ರೇಲರ ದೇವರೂ ಸರ್ವ
ಶಕ್ತನೂ ಆಗಿರುವ ಯೆಹೋವನು ಹೀಗೆನ್ನುತ್ತಾನೆ:
ಜೆರುಸಲೇಮ್ ನಗರದ ಬಗ್ಗೆ ನಾನು ಕೊಟ್ಟ ಸಂದೇಶ
ಗಳು ಬೇಗ ಕಾರ್ಯರೂಪಕ್ಕೆ ಬರುತ್ತವೆ. ನನ್ನ ಸಂದೇಶ
ಕಾರ್ಯರೂಪಕ್ಕೆ ಬರುವುದು ಕೇಡುಗಳ ಮೂಲಕವೇ
ಹೊರತು ಒಳ್ಳೆಯದರ ಮೂಲಕವಲ್ಲ. ಎಲ್ಲವೂ ನನ್ನ
ಸಂದೇಶದಂತೆ ನಡೆಯುವುದನ್ನು ನೀನು ಕಣ್ಣಾರೆ
ನೋಡುವೆ. 17ಆದರೆ ಅಂದು ಎಬೆದ್ಮೆಲೆಕನೇ, ನಾನು
ನಿನ್ನನ್ನು ರಕ್ಷಿಸುತ್ತೇನೆ.’ ಇದು ಯೆಹೋವನ ನುಡಿ.
‘ನೀನು ಊಹಿಸಿ ಭಯಪಟ್ಟಂತೆ ನಿನ್ನನ್ನು ಆ ಜನರ ಕೈಗೆ
ಒಪ್ಪಿಸುವದಿಲ್ಲ. 18ಎಬೆದ್ಮೆಲೆಕನೇ, ನಾನು ನಿನ್ನನ್ನು ರಕ್ಷಿಸು
ವೆನು. ನೀನು ಖಡ್ಗಕ್ಕೆ ಆಹುತಿಯಾಗುವದಿಲ್ಲ. ನೀನು
ತಪ್ಪಿಸಿಕೊಂಡು ಬದುಕುವೆ. ನೀನು ನನ್ನಲ್ಲಿ ನಂಬಿಕೆ
ಇಟ್ಟುಕೊಂಡಿದ್ದೇ ಇದಕ್ಕೆ ಕಾರಣ’” ಇದು ಯೆಹೋವನ
ನುಡಿ.

### ಯೆರೆಮೀಯನ ಬಿಡುಗಡೆ

40 ರಾಮನಗರದ ಹತ್ತಿರ ಅವನ ಬಿಡುಗಡೆಯಾದ
ಮೇಲೆ ಯೆರೆಮೀಯನಿಗೆ ಯೆಹೋವನಿಂದ
ಒಂದು ಸಂದೇಶ ಬಂದಿತು. ಬಾಬಿಲೋನಿನ ರಾಜನ
ವಿಶೇಷ ರಕ್ಷಕದಳದ ಅಧಿಪತಿಯಾದ ನೆಬೂಜರದಾನನು
ಯೆರೆಮೀಯನನ್ನು ರಾಮದಲ್ಲಿ ನೋಡಿದನು. ಯೆರೆ
ಮೀಯನನ್ನು ಸಂಕೋಲೆಗಳಿಂದ ಬಿಗಿಯಲಾಗಿತ್ತು.
ಅವನು ಜೆರುಸಲೇಮ್ ಮತ್ತು ಯೆಹೂದದ ಎಲ್ಲಾ ಸೆರೆ
ಯಾಳುಗಳ ಜೊತೆಗಿದ್ದನು. ಆ ಸೆರೆಯಾಳುಗಳನ್ನು ಸೆರೆ
ಹಿಡಿದು ಬಾಬಿಲೋನಿಗೆ ತೆಗೆದುಕೊಂಡು ಹೋಗ
ಲಾಗುತ್ತಿತ್ತು. 2ಅಧಿಪತಿಯಾದ ನೆಬೂಜರದಾನನು ಯೆರೆ
ಮೀಯನನ್ನು ಕಂಡಾಗ ಅವನನ್ನು ಮಾತನಾಡಿಸಿ
ಹೀಗೆಂದನು: “ಯೆರೆಮೀಯನೇ, ನಿಮ್ಮ ದೇವರಾದ
ಯೆಹೋವನು ಈ ಸ್ಥಳಕ್ಕೆ ಇಂಥಾ ದುಸ್ಥಿತಿ ಬರುವದೆಂದು
ಸಾರಿದ್ದನು. 3ಏನೇನು ಮಾಡುವೆನೆಂದು ಯೆಹೋವನು
ಹೇಳಿದ್ದನೊ ಅದೆಲ್ಲವನ್ನು ಹೇಳಿದ್ದಂತೆಯೇ ಮಾಡಿ
ದ್ದಾನೆ. ಯೆಹೂದದ ಜನರಾದ ನೀವುಗಳು ಯೆಹೋವನ
ವಿರುದ್ಧ ಪಾಪ ಮಾಡಿದ್ದರಿಂದ ಈ ಕೇಡು ಸಂಭವಿಸಿತು.
ನೀವು ಯೆಹೋವನ ಆಜ್ಞೆಯನ್ನು ಪಾಲಿಸಲಿಲ್ಲ. 4ಯೆರೆ
ಮೀಯನೇ, ನಾನು ಈಗ ನಿನ್ನನ್ನು ಬಿಡುಗಡೆ ಮಾಡು
ವೆನು. ನಾನು ನಿನ್ನ ಕೈಗಳಿಂದ ಸಂಕೋಲೆಗಳನ್ನು ಬಿಚ್ಚು
ವೆನು. ನೀನು ಇಷ್ಟಪಟ್ಟರೆ ನನ್ನ ಸಂಗಡ ಬಾಬಿಲೋನಿಗೆ
ಬಾ, ನಾನು ನಿನ್ನನ್ನು ಚೆನ್ನಾಗಿ ನೋಡಿಕೊಳ್ಳುತ್ತೇನೆ. ನಿನಗೆ
ನನ್ನ ಸಂಗಡ ಬರುವ ಇಷ್ಟವಿಲ್ಲದಿದ್ದರೆ ಬರಬೇಡ. ಇಡೀ
ದೇಶದಲ್ಲಿ ನಿನಗೆ ಎಲ್ಲಿ ಇಷ್ಟವೋ ಅಲ್ಲಿಗೆ ಹೋಗು.
5ಅಥವಾ ಅಹೀಕಾಮನ ಮಗನೂ ಶಾಫಾನನ ಮೊಮ್ಮ
ಗನೂ ಆದ ಗೆದಲ್ಯನಲ್ಲಿಗೆ ಹಿಂತಿರುಗಿಹೋಗು. ಬಾಬಿ
ಲೋನಿನ ರಾಜನು ಗೆದಲ್ಯನನ್ನು ಯೆಹೂದದ ಪಟ್ಟಣ
ಗಳಿಗೆ ಅಧಿಪತಿಯಾಗಿ ನೇಮಿಸಿದ್ದಾನೆ. ಗೆದಲ್ಯನಲ್ಲಿಗೆ
ಹೋಗಿ ಜನರೊಂದಿಗೆ ವಾಸಿಸು; ಅಥವಾ ನಿನ್ನ ಮನಸ್ಸು
ಬಂದಲ್ಲಿಗೆ ಹೋಗು.”
ತರುವಾಯ ನೆಬೂಜರದಾನನು ಯೆರೆಮೀಯನಿಗೆ
ಊಟವನ್ನೂ ಕಾಣಿಕೆಯನ್ನೂ ಕೊಟ್ಟು ಕಳುಹಿಸಿದನು.
6ಯೆರೆಮೀಯನು ಅಹೀಕಾಮನ ಮಗನಾದ ಗೆದಲ್ಯನು

ಇದ್ದ ಮಿಚ್ಪಕ್ಕೆ ಹೋದನು. ಯೆರೆಮೀಯನು ಗೆದಲ್ಯನ
ಸಂಗಡ ದೇಶದಲ್ಲಿ ಉಳಿದ ಜನರ ಮಧ್ಯೆ ವಾಸ
ಮಾಡಿದನು.

### ಗೆದಲ್ಯನ ಸಂಕ್ಷಿಪ್ತ ಆಳ್ವಿಕೆ

7ಜೆರುಸಲೇಮ್ ನಗರವನ್ನು ನಾಶಮಾಡಿದಾಗ
ಯೆಹೂದದ ಕೆಲವು ಜನ ಸೈನ್ಯಾಧಿಕಾರಿಗಳು ಮತ್ತು ಅವನ
ಸೈನಿಕರು ಇನ್ನೂ ಕಾಡುಮೇಡುಗಳಲ್ಲಿದ್ದರು. ಬಾಬಿ
ಲೋನಿನ ರಾಜನು ಅಹೀಕಾಮನ ಮಗನಾದ ಗೆದಲ್ಯ
ನನ್ನು ಅಳಿದುಳಿದ ಜನರ ಮೇಲ್ವಿಚಾರಕನನ್ನಾಗಿ ನೇಮಿಸಿ
ದ್ದಾನೆಂಬ ಸಮಾಚಾರ ಕಿವಿಗೆ ಬಿತ್ತು. ಇಲ್ಲಿ ಅಳಿದುಳಿ
ದವರು ಬಹಳ ಬಡವರಾದ ಗಂಡಸರು, ಹೆಂಗಸು ಮತ್ತು
ಮಕ್ಕಳು. ಅವರನ್ನು ಬಂಧಿಗಳನ್ನಾಗಿ ಮಾಡಿಕೊಂಡು
ಬಾಬಿಲೋನಿಗೆ ತೆಗೆದುಕೊಂಡು ಹೋಗಿರಲಿಲ್ಲ. 8ಆ
ಸೈನಿಕರು ಮಿಚ್ಪದಲ್ಲಿ ವಾಸವಾಗಿದ್ದ ಗೆದಲ್ಯನಲ್ಲಿಗೆ
ಬಂದರು. ಆ ಸೈನಿಕರು ಯಾರೆಂದರೆ: ನೆತನ್ಯನ ಮಗನಾದ
ಇಷ್ಮಾಯೇಲ, ಕಾರೇಹನ ಮಕ್ಕಳಾದ ಯೋಹಾನಾನ
ಮತ್ತು ಅವನ ಸೋದರ ಯೋನಾಥಾನ. ತನ್ಹುಮೆತನ
ಮಗನಾದ ಸೆರಾಯ, ನೆಟೋಫದವನಾದ ಏಫಯನ
ಮಕ್ಕಳು, ಮಾಕಾ ಊರಿನ ಯೆಜನ್ಯ ಮತ್ತು ಅವರ ಸಂಗಡ
ಇದ್ದ ಜನರು.

9ಅಹೀಕಾಮನ ಮಗನೂ ಶಾಫಾನನ ಮೊಮ್ಮಗನೂ
ಆದ ಗೆದಲ್ಯನು, ಆ ಸೈನಿಕರು ಮತ್ತು ಅವರ ಜನರು ಈಗ
ಅಲ್ಲಿ ಹೆಚ್ಚು ಸುರಕ್ಷಿತರೆಂದು ನಂಬಿಕೆ ಹುಟ್ಟುವ ಹಾಗೆ
ಆಣೆಮಾಡಿ ಹೇಳಿದನು. ಗೆದಲ್ಯನು ಹೀಗೆ ಹೇಳಿದನು
''ಸೈನಿಕರೇ, ಬಾಬಿಲೋನಿನ ಜನರ ಸೇವೆಮಾಡಲು
ಭಯಪಡಬೇಡಿ. ಈ ಪ್ರದೇಶದಲ್ಲಿ ನೆಲೆಸಿ ಬಾಬಿಲೋ
ನಿನ ರಾಜನ ಸೇವೆಮಾಡಿರಿ. ನೀವು ಹೀಗೆ ಮಾಡಿದರೆ ನಿಮ
ಗೆಲ್ಲ ಒಳ್ಳೆಯದಾಗುವುದು. 10ನಾನು ಸ್ವತಃ ಮಿಚ್ಪದಲ್ಲಿ
ವಾಸಮಾಡುತ್ತೇನೆ. ಇಲ್ಲಿಗೆ ಬರುವ ಕಸ್ದೀಯರ ಮುಂದೆ
ನಿಮ್ಮ ಪರವಾಗಿ ಮಾತನಾಡುತ್ತೇನೆ. ಆ ಕೆಲಸವನ್ನು ನೀವು
ನನಗೆ ಬಿಟ್ಟುಬಿಡಿ. ನೀವು ದ್ರಾಕ್ಷಾರಸ, ಹಣ್ಣು ಮತ್ತು ಎಣ್ಣೆ
ಇವುಗಳನ್ನು ಸಂಗ್ರಹಿಸಿ ನಿಮ್ಮ ಪಾತ್ರೆಗಳಲ್ಲಿ ತುಂಬಿಸಿಟ್ಟು
ನೀವು ಹಿಡಿದುಕೊಂಡ ಪಟ್ಟಣಗಳಲ್ಲಿ ವಾಸಿಸಿರಿ.''

11ಬಾಬಿಲೋನಿನ ರಾಜನು ಕೆಲವು ಜನ ಯೆಹೂದಿ
ಯರನ್ನು ಆ ಪ್ರದೇಶದಲ್ಲಿ ಬಿಟ್ಟುಹೋಗಿದ್ದಾನೆ ಮತ್ತು
ಅಹೀಕಾಮನ ಮಗನೂ ಶಾಫಾನನ ಮೊಮ್ಮಗನೂ ಆದ
ಗೆದಲ್ಯನನ್ನು ಅವರ ಅಧಿಪತಿಯನ್ನಾಗಿ ನೇಮಿಸಿದ್ದಾನೆ
ಎಂಬ ಸಮಾಚಾರವನ್ನು ಮೋವಾಬ್, ಎದೋಮ್,
ಅಮ್ಮೋನ್ ಮೊದಲಾದ ದೇಶಗಳಲ್ಲಿ ಚದುರಿಹೋಗಿದ್ದ
ಯೆಹೂದಿಯರು ಕೇಳಿದರು. 12ಯೆಹೂದದ ಆ ಜನರು
ಈ ಸಮಾಚಾರವನ್ನು ಕೇಳಿದ ಕೂಡಲೆ ತಾವು ಚದುರಿ
ಹೋಗಿದ್ದ ಎಲ್ಲಾ ದೇಶಗಳಿಂದ ಯೆಹೂದ ಪ್ರದೇಶಕ್ಕೆ
ಹಿಂತಿರುಗಿ ಮಿಚ್ಪದಲ್ಲಿದ್ದ ಗೆದಲ್ಯನ ಬಳಿಗೆ ಬಂದರು.
ಅವರು ದ್ರಾಕ್ಷಾರಸವನ್ನು ಮತ್ತು ಹಣ್ಣುಗಳನ್ನು ಸಮೃದ್ಧಿ
ಯಾಗಿ ಸಂಗ್ರಹಿಸಿದರು.

13ಕಾರೇಹನ ಮಗನಾದ ಯೋಹಾನಾನನೂ ಮತ್ತು
ಇನ್ನೂ ಕಾಡುಮೇಡುಗಳಲ್ಲಿದ್ದ ಯೆಹೂದದ ಸೈನ್ಯಾಧಿ
ಕಾರಿಗಳೂ ಗೆದಲ್ಯನಲ್ಲಿಗೆ ಬಂದರು. ಗೆದಲ್ಯನು ಮಿಚ್ಪ
ಪಟ್ಟಣದಲ್ಲಿದ್ದನು. 14ಯೋಹಾನಾನ ಮತ್ತು ಅವನ
ಸಂಗಡ ಇದ್ದ ಅಧಿಕಾರಿಗಳು ಹೀಗೆಂದರು: ''ಅಮ್ಮೋನ್ಯರ
ರಾಜನಾದ ಬಾಲೀಸನು ನಿನ್ನನ್ನು ಕೊಲ್ಲಬಯಸುತ್ತಾನೆ.
ಅವನು ನಿನ್ನನ್ನು ಕೊಲ್ಲುವದಕ್ಕಾಗಿ ನೆತನ್ಯನ ಮಗನಾದ
ಇಷ್ಮಾಯೇಲನನ್ನು ಕಳುಹಿಸಿದ್ದಾನೆ ಎಂಬುದು ನಿನಗೆ
ಗೊತ್ತಿದೆಯೇ?'' ಆದರೆ ಅಹೀಕಾಮನ ಮಗನಾದ
ಗೆದಲ್ಯನು ಅವರನ್ನು ನಂಬಲಿಲ್ಲ.

15ಆಗ ಕಾರೇಹನ ಮಗನಾದ ಯೋಹಾನಾನನು ಮಿಚ್ಪ
ದಲ್ಲಿ ಗೆದಲ್ಯನೊಂದಿಗೆ ರಹಸ್ಯವಾಗಿ ಮಾತನಾಡಿದನು.
ಯೋಹಾನಾನನು ಗೆದಲ್ಯನಿಗೆ ಹೀಗೆ ಹೇಳಿದನು:
''ನಾನು ಹೋಗಿ ನೆತನ್ಯನ ಮಗನಾದ ಇಷ್ಮಾಯೇಲನ
ಕೊಲೆ ಮಾಡುವೆನು. ಯಾರಿಗೂ ಆ ವಿಷಯ ತಿಳಿಯು
ವುದಿಲ್ಲ. ನಾವು ಇಷ್ಮಾಯೇಲನಿಗೆ ನಿನ್ನನ್ನು ಕೊಲ್ಲುವ
ಅವಕಾಶ ಕೊಡಬಾರದು. ಆದರಿಂದ ನಿನ್ನ ಆಶ್ರಯದಲ್ಲಿ
ಬಂದು ನೆಲೆಸಿದ ಎಲ್ಲಾ ಯೆಹೂದ್ಯರು ಮತ್ತೆ ಬೇರೆಬೇರೆ
ದೇಶಗಳಲ್ಲಿ ಚದುರಿಹೋಗ ಬೇಕಾಗುತ್ತದೆ. ಆಗ
ಅಳಿದುಳಿದ ಕೆಲವೇ ಜನ ಯೆಹೂದಿಗಳು ಸಹ ಇಲ್ಲ
ವಾಗುತ್ತಾರೆ.''

16ಆಗ ಅಹೀಕಾಮನ ಮಗನಾದ ಗೆದಲ್ಯನು ಕಾರೇಹನ
ಮಗನಾದ ಯೋಹಾನಾನನಿಗೆ, ''ಇಷ್ಮಾಯೇಲನನ್ನು
ಕೊಲ್ಲಬೇಡ. ನೀನು ಇಷ್ಮಾಯೇಲನ ಬಗ್ಗೆ ಹೇಳಿದ
ಸಂಗತಿಗಳು ನಿಜವಲ್ಲ'' ಎಂದನು.

41 ಏಳನೇ ತಿಂಗಳಿನಲ್ಲಿ ನೆತನ್ಯನ ಮಗನೂ
ಎಲೀಷಾಮನ ಮೊಮ್ಮಗನೂ ಆದ ಇಷ್ಮಾಯೇ
ಲನು ಅಹೀಕಾಮನ ಮಗನಾದ ಗೆದಲ್ಯನಲ್ಲಿಗೆ ಬಂದನು.
ಇಷ್ಮಾಯೇಲನು ತನ್ನ ಹತ್ತು ಮಂದಿಯೊಂದಿಗೆ ಬಂದನು.
ಆ ಜನರು ಮಿಚ್ಪ ಪಟ್ಟಣಕ್ಕೆ ಬಂದರು. ಇಷ್ಮಾಯೇಲನು
ರಾಜವಂಶೀಯನಾಗಿದ್ದನು. ಅವನು ಯೆಹೂದದ
ರಾಜನ ಒಬ್ಬ ಅಧಿಕಾರಿಯಾಗಿದ್ದನು. ಇಷ್ಮಾಯೇಲ್
ಮತ್ತು ಅವನ ಜನರು ಗೆದಲ್ಯನೊಂದಿಗೆ ಊಟ ಮಾಡಿ
ದರು. 2ಅವರು ಒಟ್ಟಿಗೆ ಊಟ ಮಾಡುತ್ತಿದ್ದಾಗ, ಇಷ್ಮಾ
ಯೇಲ್ ಮತ್ತು ಅವನ ಹತ್ತು ಜನರು ಎದ್ದು
ಅಹೀಕಾಮನ ಮಗನಾದ ಗೆದಲ್ಯನನ್ನು ಖಡ್ಗದಿಂದ
ಕೊಂದರು. ಗೆದಲ್ಯನನ್ನು ಬಾಬಿಲೋನಿನ ರಾಜನು
ಯೆಹೂದದ ಅಧಿಪತಿಯಾಗಿ ನೇಮಿಸಿದ್ದನು.

3ಇಷ್ಮಾಯೇಲನು ಗೆದಲ್ಯನ ಸಂಗಡ ಮಿಚ್ಪದಲ್ಲಿದ್ದ ಎಲ್ಲಾ
ಯೆಹೂದ್ಯರನ್ನು ಸಹ ಕೊಂದನು. ಇಷ್ಮಾಯೇಲನು
ಗೆದಲ್ಯನ ಸಂಗಡ ಇದ್ದ ಎಲ್ಲಾ ಬಾಬಿಲೋನಿನ ಸೈನಿಕರನ್ನು
ಸಹ ಕೊಂದು ಹಾಕಿದನು.

4-5ಗೆದಲ್ಯನ ಕೊಲೆಯ ಎರಡನೆಯ ದಿನ ಯೆಹೋವನ
ಆಲಯಕ್ಕೆ ನೈವೇದ್ಯವನ್ನು ಮತ್ತು ಧೂಪ ವನ್ನು
ತೆಗೆದುಕೊಂಡು ಎಂಭತ್ತು ಜನ ಯೆಹೂದ್ಯರು ಮಿಚ್ಪಕ್ಕೆ
ಬಂದರು. ಆ ಎಂಭತ್ತು ಜನ ತಮ್ಮ ಗಡ್ಡ ಬೋಳಿಸಿ
ಕೊಂಡಿದ್ದರು ಮತ್ತು ತಮ್ಮ ಬಟ್ಟೆಗಳನ್ನು ಹರಿದುಕೊಂಡು
ಗಾಯ ಮಾಡಿಕೊಂಡಿದ್ದರು. ಅವರು ಶೆಕೆಮ್, ಶಿಲೋ,
ಸಮಾರ್ಯ ಎಂಬ ಊರುಗಳಿಂದ ಬಂದಿದ್ದರು. ಗೆದಲ್ಯನ
ಕೊಲೆ ಮಾಡಲಾಗಿದೆ ಎಂಬುದು ಇವರ್ಯಾರಿಗೂ
ತಿಳಿದಿರಲಿಲ್ಲ. 6ಇಷ್ಮಾಯೇಲನು ಈ ಎಂಭತ್ತು ಜನರನ್ನು
ಕಾಣುವದಕ್ಕಾಗಿ ಮಿಚ್ಪ ಪಟ್ಟಣದ ಹೊರಗಡೆ ಹೋದನು.
ಅವರನ್ನು ಕಾಣುವದಕ್ಕೆ ಹೋಗುವಾಗ ಅವನು
ಅಳುತ್ತಿದ್ದನು. ಇಷ್ಮಾಯೇಲನು ಆ ಎಂಭತ್ತು ಜನರನ್ನು
ಎದುರುಗೊಂಡು, ‘‘ಅಹೀಕಾಮನ ಮಗನಾದ ಗೆದಲ್ಯ
ನನ್ನು ಭೇಟಿ ಮಾಡುವದಕ್ಕೆ ನನ್ನೊಂದಿಗೆ ಬನ್ನಿ’’ ಎಂದು
ಕರೆದನು. 7ಆ ಎಂಭತ್ತು ಜನರು ಮಿಚ್ಪಪಟ್ಟಣಕ್ಕೆ
ಹೋದರು. ಆಗ ಇಷ್ಮಾಯೇಲ ಮತ್ತು ಅವನ ಸಂಗಡಿ
ಗರು ಅವರಲ್ಲಿ ಎಪ್ಪತ್ತು ಮಂದಿಯನ್ನು ಕೊಂದರು.
ಇಷ್ಮಾಯೇಲ ಮತ್ತು ಅವನ ಸಂಗಡಿಗರು ಆ ಎಪ್ಪತ್ತು
ಮಂದಿ ದೇಹಗಳನ್ನು ಒಂದು ಆಳವಾದ ಬಾವಿಯಲ್ಲಿ
ಎಸೆದರು. 8ಆದರೆ ಉಳಿದ ಹತ್ತು ಜನರು ಇಷ್ಮಾಯೇಲ
ನಿಗೆ, ‘‘ನಮ್ಮನ್ನು ಕೊಲ್ಲಬೇಡ, ನಮ್ಮಲ್ಲಿ ಗೋಧಿ ಮತ್ತು
ಜವೆಗೋಧಿ, ಎಣ್ಣೆ ಮತ್ತು ಜೇನುತುಪ್ಪ ಇವೆ. ನಾವು ಆ
ವಸ್ತುಗಳನ್ನು ಒಂದು ಹೊಲದಲ್ಲಿ ಬಚ್ಚಿಟ್ಟಿದ್ದೇವೆ’’ ಎಂದು
ಹೇಳಿದರು. ಆದುದರಿಂದ ಇಷ್ಮಾಯೇಲನು ಆ ಹತ್ತು
ಮಂದಿಯನ್ನು ಬಿಟ್ಟುಬಿಟ್ಟನು. ಅವನು ಬೇರೆಯವ
ರೊಂದಿಗೆ ಅವರನ್ನು ಕೊಲ್ಲಲಿಲ್ಲ. 9ಇಷ್ಮಾಯೇಲನು ಶವ
ಗಳನ್ನು ಆ ಬಾವಿಯೊಳಗೆ ಹಾರಿದನು. ಆ ಬಾವಿಯು
ಬಹಳ ದೊಡ್ಡದಾಗಿತ್ತು. ಅದನ್ನು ಯೆಹೂದದ ರಾಜ
ನಾದ ಆಸನು ತೋಡಿಸಿದ್ದನು. ಯುದ್ಧದ ಸಮಯದಲ್ಲಿ
ನಗರದಲ್ಲಿ ನೀರು ಸಾಕಷ್ಟು ಇರಬೇಕೆಂಬ ಉದ್ದೇಶದಿಂದ
ರಾಜನಾದ ಆಸನು ಈ ಬಾವಿಯನ್ನು ತೋಡಿಸಿದ್ದನು.
ರಾಜನಾದ ಆಸನು ತನ್ನ ನಗರವನ್ನು ಇಸ್ರೇಲಿನ ರಾಜ
ನಾದ ಬಾಷನಿಂದ ರಕ್ಷಿಸುವುದಕ್ಕಾಗಿ ಇದನ್ನು ಕಟ್ಟಿಸಿದ್ದನು.

10ಮಿಚ್ಪ ನಗರದಲ್ಲಿ ಉಳಿದೆಲ್ಲ ಜನರನ್ನು ಇಷ್ಮಾಯೇ
ಲನು ವಶಪಡಿಸಿಕೊಂಡನು. ಅವರಲ್ಲಿ ರಾಜನ ಹೆಣ್ಣು
ಮಕ್ಕಳು ಮತ್ತು ಅಲ್ಲಿದ್ದ ಬೇರೆ ಜನರೂ ಸೇರಿದ್ದರು. ಆ
ಜನರನ್ನು ನೋಡಿಕೊಳ್ಳಲೆಂದು ನೆಬೂಜರದಾನನು
ಗೆದಲ್ಯನನ್ನು ನೇಮಿಸಿದ್ದನು. ನೆಬೂಜರದಾನನು ಬಾಬೆ
ಲಿನ ರಾಜನ ವಿಶೇಷ ರಕ್ಷಕದಳದ ಅಧಿಪತಿಯಾಗಿದ್ದನು.
ಇಷ್ಮಾಯೇಲನು ಆ ಜನರನ್ನು ಸೆರೆಹಿಡಿದು ಅವರನ್ನು
ತೆಗೆದುಕೊಂಡು ಅಮ್ಮೋನ್ಯರ ಸೀಮೆಗೆ ಹೊರಟನು.

11ಕಾರೇಹನ ಮಗನಾದ ಯೋಹಾನಾನನೂ ಅವ
ನೊಂದಿಗಿದ್ದ ಸಕಲ ಸೇನಾಪತಿಗಳೂ ಇಷ್ಮಾಯೇಲನು
ಮಾಡಿದ ಎಲ್ಲಾ ದುಷ್ಕೃತ್ಯಗಳ ಬಗ್ಗೆ ಕೇಳಿದರು. 12ಆದುದ
ರಿಂದ ಯೋಹಾನಾನನು ಮತ್ತು ಅವನೊಂದಿಗಿದ್ದ ಸಕಲ
ಸೇನಾಪತಿಗಳು ತಮ್ಮ ಜನರನ್ನು ಕರೆದುಕೊಂಡು ನೆತನ್ಯನ
ಮಗನಾದ ಇಷ್ಮಾಯೇಲನ ವಿರುದ್ಧ ಹೋರಾಡಲು
ಹೊರಟರು. ಅವರು ಗಿಬ್ಯೋನಿನ ದೊಡ್ಡ ಕೆರೆಯ ಹತ್ತಿರ
ಇಷ್ಮಾಯೇಲನನ್ನು ಹಿಡಿದರು. 13ಇಷ್ಮಾಯೇಲನು ಸೆರೆ
ಹಿಡಿದ ಸೆರೆಯಾಳುಗಳು ಯೋಹಾನಾನನ್ನು ಮತ್ತು
ಸೇನಾಪತಿಗಳನ್ನು ನೋಡಿದರು. ಈ ಸೆರೆಯಾಳುಗಳಿಗೆ
ಬಹಳ ಸಂತೋಷವಾಯಿತು. 14ಆಗ, ಇಷ್ಮಾಯೇಲನು
ಮಿಚ್ಪದಲ್ಲಿ ಸೆರೆಹಿಡಿದುಕೊಂಡು ಹೋಗಿದ್ದ ಎಲ್ಲಾ
ಜನರು ಕಾರೇಹನ ಮಗನಾದ ಯೋಹಾನಾನನ ಕಡೆಗೆ
ಓಡಿದರು. 15ನೆತನ್ಯನ ಮಗನಾದ ಇಷ್ಮಾಯೇಲನು ಮತ್ತು
ಅವನ ಎಂಟು ಜನ ಸಂಗಡಿಗರು ಯೋಹಾನಾನ ನಿಂದ
ತಪ್ಪಿಸಿಕೊಂಡು ಅಮ್ಮೋನ್ಯರ ಮರೆಹೊಕ್ಕನು.

16ಇಷ್ಮಾಯೇಲನು ಗೆದಲ್ಯನನ್ನು ಕೊಂದು ಮಿಚ್ಪದಲ್ಲಿ
ಸೆರೆಹಿಡಿದ ಬಂದಿಗಳನ್ನು ಕಾರೇಹನ ಮಗನಾದ
ಯೋಹಾನಾನನು ಮತ್ತು ಅವನ ಸೇನಾಪತಿಗಳು
ರಕ್ಷಿಸಿದರು. ಆಗ ಉಳಿದುಕೊಂಡವರಲ್ಲಿ ಸೈನಿಕರು,
ಹೆಂಗಸರು, ಮಕ್ಕಳು ಮತ್ತು ಅಧಿಕಾರಿಗಳು ಸೇರಿದ್ದರು.
ಯೋಹಾನಾನನು ಗಿಬ್ಯೋನಿನಿಂದ ಅವರನ್ನು ಹಿಂದಕ್ಕೆ
ಕರೆತಂದನು.

### ಈಜಿಪ್ಟಿಗೆ ವಲಸೆ

17-18ಯೋಹಾನಾನನೂ ಉಳಿದ ಸೇನಾಧಿಪತಿಗಳೂ
ಕಸ್ದೀಯರಿಗೆ ಹೆದರಿದರು. ಬಾಬಿಲೋನಿನ ರಾಜನು
ಗೆದಲ್ಯನನ್ನು ಯೆಹೂದದ ಅಧಿಪತಿಯಾಗಿ ನೇಮಿಸಿ
ದ್ದನು. ಆದರೆ ಇಷ್ಮಾಯೇಲನು ಗೆದಲ್ಯನನ್ನು ಕೊಲೆ
ಮಾಡಿದನು. ಇದರಿಂದ ಕಸ್ದೀಯರಿಗೆ ಕೋಪ ಬರಬಹು
ದೆಂದು ಯೋಹಾನಾನನು ಭಯಪಟ್ಟನು. ಆದುದರಿಂದ
ಈಜಿಪ್ಟಿಗೆ ಓಡಿಹೋಗಬೇಕೆಂದು ಅವರು ನಿರ್ಧರಿಸಿ
ದರು. ಈಜಿಪ್ಟಿಗೆ ಹೋಗುವ ದಾರಿಯಲ್ಲಿ ಅವರು
ಗೇರುಥ್ ಕಿಮ್ಹಾಮಿನಲ್ಲಿ ಇಳಿದುಕೊಂಡರು. ಗೇರುಥ್
ಕಿಮ್ಹಾಮು ಬೇತ್ಲೆಹೇಮ್ ಪಟ್ಟಣದ ಸಮೀಪದಲ್ಲಿದೆ.

42 ಅವರು ಗೇರುಥ್ ಕಿಮ್ಹಾಮಿನಲ್ಲಿ ಇಳಿದು
ಕೊಂಡಿದ್ದಾಗ ಯೋಹಾನಾನನೂ ಹೋಷಾ
ಯನ ಮಗನಾದ ಯೆಜನ್ಯನೂ ಪ್ರವಾದಿಯಾದ

ಯೆರೆಮೀಯನಲ್ಲಿಗೆ ಹೋದರು. ಯೋಹಾನಾನ ಮತ್ತು
ಯೆಜನ್ಯನ ಸಂಗಡ ಎಲ್ಲಾ ಅಧಿಕಾರಿಗಳೂ ಆಪ್ರಮುಖ
ರಿಂದ ಅತಿ ಪ್ರಮುಖರವರೆಗಿನ ಎಲ್ಲಾ ಜನರೂ
ಹೋದರು. 2ಅವರೆಲ್ಲರೂ ಅವನಿಗೆ, ‘‘ಯೆರೆಮೀ
ಯನೇ, ನಮ್ಮ ಬೇಡಿಕೆಯನ್ನು ದಯವಿಟ್ಟು ಕೇಳು.
ಯೆಹೂದಕುಲದಲ್ಲಿ ಅಳಿದುಳಿದ ಎಲ್ಲಾ ಜನರಿಗಾಗಿ ನಿನ್ನ
ದೇವರಾದ ಯೆಹೋವನನ್ನು ಪ್ರಾರ್ಥಿಸು. ಯೆರೆಮೀ
ಯನೇ, ನಮ್ಮಲ್ಲಿ ಈಗ ಬಹಳ ಜನ ಉಳಿದಿಲ್ಲವೆಂಬುದು
ನಿನಗೆ ಗೊತ್ತಿದೆ. ಒಂದು ಕಾಲದಲ್ಲಿ ನಾವು ಬಹಳ
ಜನರಿದ್ದೆವು. 3ಯೆರೆಮೀಯನೇ, ನಾವು ಎಲ್ಲಿಗೆ ಹೋಗ
ಬೇಕು, ಏನು ಮಾಡಬೇಕು ಎಂಬುದನ್ನು ಹೇಳ
ಬೇಕೆಂದು ನಿನ್ನ ದೇವರನ್ನು ಪ್ರಾರ್ಥಿಸು’’ ಎಂದರು. 4ಆಗ
ಪ್ರವಾದಿಯಾದ ಯೆರೆಮೀಯನು, ‘‘ನಾನು ಏನು ಮಾಡ
ಬೇಕೆಂದು ನೀವು ಬಯಸುವಿರೆಂಬುದು ನನಗೆ ಗೊತ್ತು.
ನೀವು ಹೇಳಿದಂತೆಯೇ, ನಿಮ್ಮ ದೇವರಾದ ಯೆಹೋವ
ನನ್ನು ಪ್ರಾರ್ಥಿಸುವೆನು. ಯೆಹೋವನು ಹೇಳಿದ್ದನ್ನೆಲ್ಲ
ವನ್ನು ನಾನು ನಿಮಗೆ ಹೇಳುತ್ತೇನೆ. ನಾನು ನಿಮ್ಮಿಂದ
ಏನನ್ನೂ ಮುಚ್ಚಿಡುವದಿಲ್ಲ’’ ಎಂದನು.
5‘‘ನಿನ್ನ ದೇವರಾದ ಯೆಹೋವನು ಹೇಳಿದ ಎಲ್ಲವನ್ನು
ನಾವು ಮಾಡದಿದ್ದಲ್ಲಿ ಯೆಹೋವನು ಸ್ವತಃ ನಮ್ಮ ವಿರುದ್ಧ
ಸ್ಥಿರವಾದ ಸತ್ಯಸಾಕ್ಷಿಯಾಗಿ ನಿಲ್ಲಲಿ. ನಾವು ಏನು ಮಾಡ
ಬೇಕೆಂಬುದನ್ನು ತಿಳಿಸಲು ನಿನ್ನ ದೇವರಾದ ಯೆಹೋ
ವನು ನಿನ್ನನ್ನು ಕಳುಹಿಸುತ್ತಾನೆಂದು ನಾವು ಬಲ್ಲೆವು.
6ಯೆಹೋವನ ಸಂದೇಶವು ನಮಗೆ ಇಷ್ಟವಾಗಲಿ ಅಥವಾ
ಇಷ್ಟವಾಗದಿರಲಿ ನಾವು ನಮ್ಮ ದೇವರಾದ ಯೆಹೋವನ
ಆಜ್ಞೆಯನ್ನು ಪಾಲಿಸುತ್ತೇವೆ. ಯೆಹೋವನ ಸಂದೇಶ
ಕ್ಕಾಗಿ ನಾವು ನಿನ್ನನ್ನು ಆತನಲ್ಲಿಗೆ ಕಳುಹಿಸುತ್ತಿದ್ದೇವೆ.
ಆತನು ಹೇಳಿದಂತೆ ನಾವು ನಡೆದುಕೊಳ್ಳುತ್ತೇವೆ. ಆಗ
ನಮಗೆ ಒಳ್ಳೆಯದಾಗುತ್ತದೆ. ಹೌದು, ನಮ್ಮ ದೇವರಾದ
ಯೆಹೋವನು ಹೇಳಿದಂತೆಯೇ ನಾವು ನಡೆದು
ಕೊಳ್ಳುತ್ತೇವೆ.’’
7ಹತ್ತು ದಿನಗಳ ನಂತರ ಯೆರೆಮೀಯನಿಗೆ ಯೆಹೋವ
ನಿಂದ ಸಂದೇಶ ಬಂದಿತು. 8ಆಗ ಯೆರೆಮೀಯನು
ಕಾರೇಹನ ಮಗನಾದ ಯೋಹಾನಾನನನ್ನೂ ಅವನ
ಜೊತಗಿದ್ದ ಸೇನಾಧಿಪತಿಗಳನ್ನೂ ಕರೆದನು. ಪ್ರಮು
ಖರು, ಅಪ್ರಮುಖರು ಎನ್ನದೆ ಒಟ್ಟಾಗಿ ಬರಲು ಎಲ್ಲಾ
ಜನರನ್ನು ಯೆರೆಮೀಯನು ಕರೆದನು. 9ಯೆರೆಮೀ
ಯನು ಅವರಿಗೆ ಹೀಗೆ ಹೇಳಿದನು: ‘‘ಇಸ್ರೇಲರ ದೇವ
ರಾದ ಯೆಹೋವನು ಇಂತೆನ್ನುತ್ತಾನೆ. ನೀವು ನನ್ನನ್ನು
ಅವನಲ್ಲಿಗೆ ಕಳುಹಿಸಿದಿರಿ. ನೀವು ಕೇಳೆಂದು ನನಗೆ ಹೇಳಿ
ದ್ದನ್ನು ನಾನು ಯೆಹೋವನಿಗೆ ಕೇಳಿದೆ. ಯೆಹೋವನು
ಹೀಗೆ ಹೇಳುತ್ತಾನೆ. 10‘ನೀವು ಯೆಹೂದದಲ್ಲಿ ವಾಸ
ಮಾಡಿದರೆ ನಾನು ನಿಮ್ಮನ್ನು ನಾಶಮಾಡದೆ ಬಲಶಾಲಿ
ಗಳನ್ನಾಗಿ ಮಾಡುತ್ತೇನೆ. ನಾನು ನಿಮ್ಮನ್ನು ನೆಡುತ್ತೇನೆ,
ನಿಮ್ಮನ್ನು ಕೀಳುವುದಿಲ್ಲ. ನಾನು ನಿಮಗೆ ಬರಮಾಡಿದ
ಭಯಂಕರವಾದ ಕೇಡಿಗಾಗಿ ದುಃಖಿತನಾಗಿದ್ದೇನೆ. 11ಈಗ
ನೀವು ಬಾಬಿಲೋನಿನ ರಾಜನಿಗೆ ಹೆದರಿದ್ದೀರಿ. ಆದರೆ
ಅವನಿಗೆ ಅಂಜಬೇಡಿರಿ. ಇದು ಯೆಹೋವನ ನುಡಿ.
‘ಏಕೆಂದರೆ ನಾನು ನಿಮ್ಮೊಂದಿಗಿದ್ದೇನೆ, ನಾನೇ ನಿಮ್ಮನ್ನು
ರಕ್ಷಿಸುವೆನು. ನಾನು ನಿಮ್ಮನ್ನು ಕಷ್ಟದಿಂದ ಪಾರು
ಮಾಡುವೆನು. ಅವನ ಕೈಗೆ ನೀವು ಸಿಗುವುದಿಲ್ಲ.
12ನಾನು ನಿಮಗೆ ದಯೆತೋರುತ್ತೇನೆ. ಬಾಬಿಲೋನಿನ
ರಾಜನು ಸಹ ನಿಮಗೆ ದಯೆತೋರುವನು. ಅವನು
ನಿಮ್ಮನ್ನು ನಿಮ್ಮ ದೇಶಕ್ಕೆ ಮರಳಿ ತರುವನು. 13ಆದರೆ
‘ಾವು ಯೆಹೂದದಲ್ಲಿ ವಾಸಿಸುವದಿಲ್ಲ’ವೆಂದು ನೀವು
ಹೇಳ ಬಹುದು. ನೀವು ಹಾಗೆ ಹೇಳಿದರೆ ನೀವು ನಿಮ್ಮ
ದೇವರಾದ ಯೆಹೋವನ ಮಾತನ್ನು ಮೀರಿದಂತಾಗು
ತ್ತದೆ. 14‘ಇಲ್ಲ, ನಾವು ಈಜಿಪ್ಟಿಗೆ ಹೋಗಿ ಅಲ್ಲಿ ವಾಸ
ಮಾಡುವೆವು. ಅಲ್ಲಿ ನಮಗೆ ಯುದ್ಧದ ಭಯವಿಲ್ಲ.
ಯುದ್ಧದ ತುತ್ತೂರಿಗಳ ಶಬ್ಧವು ಕೇಳುವುದಿಲ್ಲ; ಅಲ್ಲಿ
ನಮಗೆ ಹಸಿವೆ ಇರುವುದಿಲ್ಲ’ ಎಂದು ನೀವು ಹೇಳ
ಬಹುದು. 15ಯೆಹೂದದ ಶ್ರೇಷ್ಠ ಜನಗಳೇ, ನೀವು
ಒಂದು ವೇಳೆ ಹಾಗೆ ಹೇಳುವುದಾದರೆ ಯೆಹೋವನ
ಸಂದೇಶವನ್ನು ಕೇಳಿರಿ: ಇಸ್ರೇಲರ ದೇವರೂ ಸರ್ವ
ಶಕ್ತನೂ ಆಗಿರುವ ಯೆಹೋವನು ಹೀಗೆ ಹೇಳುತ್ತಾನೆ:
‘ನೀವು ಈಜಿಪ್ಟಿಗೆ ಹೋಗಿ ಅಲ್ಲಿ ವಾಸ ಮಾಡ ಬೇಕೆಂದು
ತೀರ್ಮಾನಿಸಿದ್ದರೆ ಪರಿಸ್ಥಿತಿ ಹೀಗಾಗುವುದು: 16ನೀವು
ಯುದ್ಧದ ಖಡ್ಗಕ್ಕೆ ಹೆದರುವಿರಿ. ಆದರೆ ಅದು ನಿಮ್ಮನ್ನು
ಅಲ್ಲಿ ಸೋಲಿಸುವುದು. ನಿಮಗೆ ಹಸಿವಿನ ಬಗ್ಗೆ ಯೋಚನೆ
ಯಿದೆ. ಆದರೆ ಈಜಿಪ್ಟಿನಲ್ಲಿ ನೀವು ಹಸಿವಿನಿಂದ ಬಳಲು
ವಿರಿ. ನೀವು ಅಲ್ಲಿ ಸತ್ತುಹೋಗುವಿರಿ. 17ಈಜಿಪ್ಟಿಗೆ ಹೋಗಿ
ಅಲ್ಲಿ ನೆಲೆಸಬೇಕೆಂದು ನಿಶ್ಚಯಿಸಿದವರೆಲ್ಲರೂ ಖಡ್ಗ
ದಿಂದಾಗಲೀ ಹಸಿವಿನಿಂದಾಗಲೀ ಭಯಂಕರ ವ್ಯಾಧಿ
ಯಿಂದಾಗಲೀ ಸತ್ತುಹೋಗುವರು. ಈಜಿಪ್ಟಿಗೆ ಹೋದವ
ರಲ್ಲಿ ಒಬ್ಬನೂ ಬದುಕಿರಲಾರ. ನಾನು ಅವರಿಗೆ ಉಂಟು
ಮಾಡುವ ಪೀಡೆಯಿಂದ ಒಬ್ಬನೂ ತಪ್ಪಿಸಿಕೊಳ್ಳಲಾರ.’
18‘‘ಸರ್ವಶಕ್ತನೂ ಇಸ್ರೇಲರ ದೇವರೂ ಆಗಿರುವ
ಯೆಹೋವನು ಹೀಗೆಂದನು: ‘ನಾನು ಜೆರುಸಲೇಮಿನ
ಮೇಲೆ ನನ್ನ ಕೋಪವನ್ನು ತೋರಿಸಿದೆ. ಜೆರುಸ
ಲೇಮಿನಲ್ಲಿ ವಾಸಿಸುವ ಜನರನ್ನು ನಾನು ದಂಡಿಸಿದೆ. ಅದೇ
ರೀತಿ, ಈಜಿಪ್ಟಿಗೆ ಹೋಗುವವರೆಲ್ಲರ ಮೇಲೂ ನಾನು
ನನ್ನ ಕೋಪವನ್ನು ತೋರಿಸುವೆನು. ಬೇರೆಯವರಿಗೆ ಕೆಟ್ಟ
ದಾಗಲಿ ಎಂದು ಹೇಳಬೇಕಾದಾಗ ಜನರು ನಿಮ್ಮಂತೆ
ಆಗಲಿ ಎಂದು ನಿಮ್ಮ ಉದಾಹರಣೆಯನ್ನು ಕೊಡುವರು.

ನೀವು ಒಂದು ಶಾಪದ ಶಬ್ದವಾಗುವಿರಿ. ಜನರು ನಿಮ್ಮಿಂದ
ನಾಚಿಕೆಪಟ್ಟುಕೊಳ್ಳುವರು. ಜನರು ನಿಮ್ಮನ್ನು ಅಪಮಾನ
ಮಾಡುವರು. ಯೆಹೂದವನ್ನು ಪುನಃ ನೀವು ಎಂದೂ
ನೋಡುವದಿಲ್ಲ.’

19‘‘ಯೆಹೂದ್ಯರಲ್ಲಿ ಅಳಿದುಳಿದವರೇ, ಯೆಹೋ
ವನು ನಿಮಗೆ ಹೇಳಿದ್ದಾನೆ, ‘ಈಜಿಪ್ಟಿಗೆ ಹೋಗಬೇಡಿರಿ,’
ನಾನು ಈಗಲೇ ನಿಮಗೆ ಮುನ್ನೆಚ್ಚರಿಕೆಯನ್ನು ಕೊಡು
ತ್ತೇನೆ. 20ನೀವು ನಿಮಗೆ ಮರಣವನ್ನು ಬರಮಾಡುವ
ತಪ್ಪನ್ನು ಮಾಡುತ್ತಿದ್ದೀರಿ. ನೀವು ನನ್ನನ್ನು ನಿಮ್ಮ ದೇವ
ರಾದ ಯೆಹೋವನಲ್ಲಿಗೆ ಕಳುಹಿಸಿದಿರಿ. ‘ನಮಗಾಗಿ
ಯೆಹೋವನಾದ ನಮ್ಮ ದೇವರನ್ನು ಪ್ರಾರ್ಥಿಸು.
ದೇವರು ಮಾಡಬೇಕೆಂದು ಹೇಳಿದ್ದೆಲ್ಲವನ್ನು ನಮಗೆ
ಹೇಳು, ನಾವು ಯೆಹೋವನ ಆಜ್ಞೆಯನ್ನು ಪಾಲಿಸುತ್ತೇವೆ’
ಎಂದು ನೀವು ಹೇಳಿದ್ದಿರಿ. 21ಇಂದು, ನಾನು ನಿಮಗೆ
ಯೆಹೋವನ ಸಂದೇಶವನ್ನು ತಿಳಿಸಿದ್ದೇನೆ. ಆದರೆ ನೀವು
ನಿಮ್ಮ ದೇವರಾದ ಯೆಹೋವನ ಆಜ್ಞೆಯನ್ನು ಪಾಲಿಸ
ಲಿಲ್ಲ. ನನ್ನ ಮೂಲಕ ಆತನು ನಿಮಗೆ ಹೇಳಿದ ಯಾವ
ಮಾತನ್ನೂ ನೀವು ಕೇಳಲಿಲ್ಲ. 22ಈಗ ನೀವು ಇದನ್ನು
ನಿಶ್ಚಿತವಾಗಿ ತಿಳಿದುಕೊಳ್ಳಿ, ನೀವು ಈಜಿಪ್ಟಿನಲ್ಲಿ ವಾಸ
ಮಾಡಲು ಹೋಗಬೇಕನ್ನುವಿರಿ. ಆದರೆ ಈಜಿಪ್ಟಿನಲ್ಲಿ
ನೀವು ಖಡ್ಗದಿಂದಾದರೂ ಸಾಯುವಿರಿ, ಹಸಿವಿನಿಂದಾ
ದರೂ ಸಾಯುವಿರಿ, ಅಥವಾ ಭಯಂಕರವಾದ ವ್ಯಾಧಿ
ಯಿಂದಾದರೂ ಸಾಯುವಿರಿ.’’

43 ಯೆರೆಮೀಯನು ದೇವರಾದ ಯೆಹೋವನ
ಸಂದೇಶವನ್ನು ಜನರಿಗೆ ಹೇಳಿ ಮುಗಿಸಿದನು.
ಯೆಹೋವನು ತನ್ನ ಮೂಲಕ ಹೇಳಿ ಕಳುಹಿಸಿದ
ಮಾತುಗಳನ್ನೆಲ್ಲ ಯೆರೆಮೀಯನು ಅವರಿಗೆ ತಿಳಿಸಿದನು.
2ಹೋಷಾಯನ ಮಗನಾದ ಅಜರ್ಯನೂ ಕಾರೇಹನ
ಮಗನಾದ ಯೋಹಾನಾನನೂ ಮತ್ತು ಇನ್ನೂ ಕೆಲವರು
ದುರಹಂಕಾರಿಗಳಾಗಿದ್ದರು ಮತ್ತು ಹಟಮಾರಿಗಳಾಗಿ
ದ್ದರು. ಈ ಜನರು ಯೆರೆಮೀಯನ ಮೇಲೆ ಕೋಪ
ಗೊಂಡು ‘‘ಯೆರೆಮೀಯನೇ, ನೀನು ಸುಳ್ಳು ಹೇಳುತ್ತಿ
ರುವೆ. ನಮ್ಮ ದೇವರಾದ ಯೆಹೋವನು ನಮಗೆ ‘ನೀವು
ಈಜಿಪ್ಟಿಗೆ ವಾಸ ಮಾಡಲು ಹೋಗಬಾರದು’ ಎಂದು
ಹೇಳುವದಕ್ಕಾಗಿ ನಿನ್ನನ್ನು ಕಳುಹಿಸಿಲ್ಲ. 3ಯೆರೆಮೀ
ಯನೇ, ನೀನು ನಮ್ಮ ವಿರುದ್ಧವಾಗಿರುವಂತೆ ನೇರೀಯನ
ಮಗನಾದ ಬಾರೂಕನು ಪ್ರೋತ್ಸಾಹಿಸುತ್ತಿದ್ದಾನೆ
ಎಂಬುದು ನಮ್ಮ ಆಲೋಚನೆ. ಅವನು ನಮ್ಮನ್ನು ಬಾಬಿ
ಲೋನಿನ ಜನರ ಕೈಗೆ ಕೊಟ್ಟು ಅವರಿಂದ ಕೊಲ್ಲಿಸ
ಬಯಸುತ್ತಾನೆ ಅಥವಾ ಅವರು ನಮ್ಮನ್ನು ಸೆರೆಹಿಡಿದು
ಬಾಬಿಲೋನಿಗೆ ಕೊಂಡೊಯ್ಯುವಂತೆ ಮಾಡಬಯಸು
ತ್ತಾನೆಂದು ತೋರುತ್ತದೆ.’’

4ಯೋಹಾನಾನನು, ಸೇನಾಧಿಪತಿಗಳು ಮತ್ತು ಎಲ್ಲಾ
ಜನರು ಯೆಹೋವನ ಆಜ್ಞೆಯನ್ನು ಮೀರಿದರು.
ಯೆಹೂದದಲ್ಲಿ ಇರಬೇಕೆಂದು ಯೆಹೋವನು ಅವರಿಗೆ
ಆಜ್ಞಾಪಿಸಿದ್ದನು. 5ಆದರೆ ಯೆಹೋವನ ಆಜ್ಞೆಯನ್ನು
ಉಲ್ಲಂಘಿಸಿ ಯೋಹಾನಾನನು ಮತ್ತು ಸೇನಾಧಿಪತಿಗಳು
ಅಳಿದುಳಿದ ಜನರನ್ನು ಯೆಹೂದದಿಂದ ಈಜಿಪ್ಟಿಗೆ
ಕರೆದುಕೊಂಡು ಹೋದರು. ಈ ಮುಂಚೆ ಶತ್ರುಗಳು ಆ
ಜನರನ್ನು ಬೇರೆ ದೇಶಗಳಿಗೆ ತೆಗೆದುಕೊಂಡು ಹೋಗಿ
ದ್ದರು. ಆದರೆ ಅವರು ಯೆಹೂದಕ್ಕೆ ತಿರುಗಿ ಬಂದಿದ್ದರು.
6ಈಗ ಯೋಹಾನಾನ ಮತ್ತು ಎಲ್ಲಾ ಸೈನ್ಯಾಧಿಕಾರಿಗಳು,
ಎಲ್ಲಾ ಗಂಡಸರು, ಹೆಂಗಸರು ಮತ್ತು ಮಕ್ಕಳನ್ನು
ಈಜಿಪ್ಟಿಗೆ ತೆಗೆದುಕೊಂಡು ಹೋದರು. ಆ ಜನಗಳಲ್ಲಿ
ರಾಜನ ಹೆಣ್ಣು ಮಕ್ಕಳಿದ್ದರು. (ನೆಬೂಜರದಾನನು
ಗೆದಲ್ಯನನ್ನು ಆ ಜನರ ಮೇಲ್ವಿಚಾರಕನನ್ನಾಗಿ
ನೇಮಿಸಿದ್ದನು. ನೆಬೂಜರದಾನನು ಬಾಬಿಲೋನಿನ
ರಾಜನ ವಿಶೇಷ ರಕ್ಷಕದಳದ ಅಧಿಪತಿಯಾಗಿದ್ದನು).
ಯೋಹಾನಾನನು ಪ್ರವಾದಿಯಾದ ಯೆರೆಮೀಯನನ್ನು
ಮತ್ತು ನೇರೀಯನ ಮಗನಾದ ಬಾರೂಕನನ್ನು ತೆಗೆದು
ಕೊಂಡು ಹೋದನು. 7ಆ ಜನರು ಯೆಹೋವನ ಮಾತು
ಗಳನ್ನು ಕಿವಿಗೆ ಹಾಕಿಕೊಳ್ಳಲಿಲ್ಲ. ಆ ಎಲ್ಲಾ ಜನರು
ಈಜಿಪ್ಟಿಗೆ ಹೋದರು. ಅವರು ತಹಪನೇಸ್ ಎಂಬ
ಊರಿಗೆ ಸೇರಿದರು.

8ತಹಪನೇಸ್ ಊರಿನಲ್ಲಿ ಯೆರೆಮೀಯನಿಗೆ
ಯೆಹೋವನಿಂದ ಈ ಸಂದೇಶ ಬಂದಿತು: 9‘‘ಯೆರೆಮೀ
ಯನೇ, ನೀನು ನಿನ್ನ ಕೈಯಲ್ಲಿ ದೊಡ್ಡ ಕಲ್ಲುಗಳನ್ನು
ತೆಗೆದುಕೊಂಡು ಹೋಗಿ ತಹಪನೇಸಿನಲ್ಲಿರುವ
ಫರೋಹನ ಮನೆಯ ಬಾಗಿಲ ಮುಂದೆ ಹೂಳಿ ಗಾರೆ
ಯಿಂದ ಮುಚ್ಚಿಬಿಡು. ಯೆಹೂದದ ಜನರ ಎದುರಿ
ನಲ್ಲಿಯೇ ಹೀಗೆ ಮಾಡು. 10ನಿನ್ನನ್ನು ನೋಡುತ್ತಿದ್ದ ಆ
ಯೆಹೂದ್ಯರಿಗೆ ಹೀಗೆ ಹೇಳು: ‘ಇಸ್ರೇಲಿನ ದೇವರೂ
ಸರ್ವಶಕ್ತನೂ ಆಗಿರುವ ಯೆಹೋವನು ಹೀಗೆ ಹೇಳು
ತ್ತಾನೆ, ನಾನು ಬಾಬಿಲೋನಿನ ರಾಜನಾದ ನೆಬೂಕ
ದ್ನೆಚ್ಚರನನ್ನು ಇಲ್ಲಿಗೆ ಕರೆಸುತ್ತೇನೆ. ಅವನು ನನ್ನ ಸೇವಕ
ನಾಗಿದ್ದಾನೆ. ನಾನು ಈ ಸ್ಥಳದಲ್ಲಿ ಹೂಳಿದ ಕಲ್ಲುಗಳ
ಮೇಲೆ ಅವನ ಸಿಂಹಾಸನವನ್ನು ಸ್ಥಾಪಿಸುತ್ತೇನೆ. ನೆಬೂಕ
ದ್ನೆಚ್ಚರನು ಈ ಕಲ್ಲುಗಳ ಮೇಲೆ ತನ್ನ ಗುಡಾರವನ್ನು
ಹಾಕುವನು. 11ನೆಬೂಕದ್ನೆಚ್ಚರನು ಇಲ್ಲಿಗೆ ಬಂದು
ಈಜಿಪ್ಟಿನ ಮೇಲೆ ಧಾಳಿ ಮಾಡುವನು. ಕೊಲ್ಲಬೇಕೆಂದು
ಗೊತ್ತುಮಾಡಿದವರನ್ನು ಕೊಂದುಹಾಕುವನು; ಸೆರೆ
ಹಿಡಿಯಬೇಕೆಂದು ಗೊತ್ತುಮಾಡಿಕೊಂಡವರನ್ನು ಸೆರೆ
ಹಿಡಿಯುವನು; ಖಡ್ಗದಿಂದ ಕೊಲೆಯಾಗಬೇಕೆಂದು
ಗೊತ್ತುಪಡಿಸಿದವರ ಸಲುವಾಗಿ ಅವನು ಖಡ್ಗವನ್ನು

ತರುವನು. 12ಈಜಿಪ್ಟಿನ ಸುಳ್ಳುದೇವರುಗಳ ಆಲಯದಲ್ಲಿ
ನೆಬೂಕದ್ನೆಚ್ಚರನು ಬೆಂಕಿಯನ್ನು ಹೊತ್ತಿಸುವನು, ಅವನು
ಆಲಯಗಳನ್ನು ಸುಟ್ಟು ಆ ವಿಗ್ರಹಗಳನ್ನು ತೆಗೆದು
ಕೊಂಡು ಹೋಗುವನು. ಕುರುಬನು ತನ್ನ ಬಟ್ಟೆಗಳಿಂದ
ತಿಗಣೆ ಮತ್ತು ಹೇನುಗಳನ್ನು ತೆಗೆದುಹಾಕಿ ಸ್ವಚ್ಛಗೊಳಿಸು
ವಂತೆ ನೆಬೂಕದ್ನೆಚ್ಚರನು ಈಜಿಪ್ಟನ್ನು ಸ್ವಚ್ಛಗೊಳಿಸುವನು.
ಆಮೇಲೆ ಅವನು ಸುರಕ್ಷಿತವಾಗಿ ಈಜಿಪ್ಟನ್ನು ಬಿಟ್ಟು
ಹೋಗುವನು. 13ನೆಬೂಕದ್ನೆಚ್ಚರನು ಈಜಿಪ್ಟಿನ ಸೂರ್ಯ
ದೇವಾಲಯದಲ್ಲಿದ್ದ ಸ್ಮಾರಕ ಸ್ತಂಭಗಳನ್ನು ನಾಶ
ಪಡಿಸುವನು. ಅವನು ಈಜಿಪ್ಟಿನ ಸುಳ್ಳುದೇವರುಗಳ
ಆಲಯಗಳನ್ನು ಸುಟ್ಟುಹಾಕುವನು.'''

## ಈಜಿಪ್ಟಿನಲ್ಲಿದ್ದ ಯೆಹೂದ್ಯರಿಗೆ ಯೆಹೋವನ ಸಂದೇಶ

44 ಯೆರೆಮೀಯನಿಗೆ ಯೆಹೋವನಿಂದ ಒಂದು
ಸಂದೇಶ ಬಂದಿತು. ಈ ಸಂದೇಶವನ್ನು ಈಜಿಪ್ಟಿ
ನಲ್ಲಿ ವಾಸಿಸಿದ ಎಲ್ಲಾ ಯೆಹೂದ್ಯರಿಗಾಗಿ ಕೊಡಲಾಗಿತ್ತು.
ಈ ಸಂದೇಶವು ಮಿಗ್ದೋಲ್, ತಹಪನೇಸ್, ನೋಫ್
ಪಟ್ಟಣಗಳಲ್ಲಿ ಮತ್ತು ಈಜಿಪ್ಟಿನ ದಕ್ಷಿಣ ಭಾಗದಲ್ಲಿ ವಾಸ
ಮಾಡುತ್ತಿದ್ದ ಯೆಹೂದ್ಯರಿಗಾಗಿ ಇತ್ತು. ಆ ಸಂದೇಶವೇ
ನಂದರೆ: 2ಇಸ್ರೇಲಿನ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ಹೇಳುತ್ತಾನೆ, ''ನಾನು ಜೆರುಸಲೇಮ್
ನಗರಕ್ಕೂ ಮತ್ತು ಯೆಹೂದದ ಎಲ್ಲಾ ಪಟ್ಟಣಗಳಿಗೂ
ತಂದ ಭಯಂಕರವಾದ ಕೇಡನ್ನು ನೀವು ನೋಡಿದ್ದೀರಿ.
ಆ ಪಟ್ಟಣಗಳು ಇಂದು ಕೇವಲ ಕಲ್ಲಿನ ಗುಡ್ಡೆಗಳಾಗಿವೆ.
3ಅಲ್ಲಿ ವಾಸಿಸುವ ಜನರು ದುಷ್ಕೃತ್ಯಗಳನ್ನು ಮಾಡಿದ್ದರಿಂದ
ಸ್ಥಳಗಳನ್ನು ನಾಶಮಾಡಲಾಯಿತು. ಆ ಜನರು ಬೇರೆ
ದೇವರುಗಳಿಗೆ ಬಲಿಯನ್ನು ಅರ್ಪಿಸಿದ್ದಾರೆ. ಆದುದರಿಂದ
ನನಗೆ ಕೋಪ ಬಂದಿದೆ. ಹಿಂದೆ ನಿಮ್ಮ ಜನರು ಮತ್ತು
ನಿಮ್ಮ ಪೂರ್ವಿಕರು ಆ ದೇವರುಗಳನ್ನು ಪೂಜಿಸಿರಲಿಲ್ಲ.
4ನಾನು ಮತ್ತೆಮತ್ತೆ ನನ್ನ ಪ್ರವಾದಿಗಳನ್ನು ಆ ಜನರಲ್ಲಿಗೆ
ಕಳಿಸಿಕೊಟ್ಟೆ. ಆ ಪ್ರವಾದಿಗಳು ನನ್ನ ಸೇವಕರಾಗಿದ್ದರು.
ಆ ಪ್ರವಾದಿಗಳು ನನ್ನ ಸಂದೇಶವನ್ನು ಜನರಿಗೆ ತಿಳಿಸಿ 'ಈ
ದುಷ್ಟ ಕಾರ್ಯವನ್ನು ಮಾಡಬೇಡಿರಿ, ನೀವು ಈ
ವಿಗ್ರಹಗಳ ಪೂಜೆಮಾಡುವದನ್ನು ನಾನು ದ್ವೇಷಿಸುತ್ತೇನೆ'
ಎಂದು ಹೇಳಿದರು. 5ಆದರೆ ಆ ಜನರು ಪ್ರವಾದಿಗಳ
ಮಾತನ್ನು ಕಿವಿಗೆ ಹಾಕಿಕೊಳ್ಳಲಿಲ್ಲ. ಅವರು ಆ ಪ್ರವಾದಿಗಳ
ಕಡೆಗೆ ಗಮನಕೊಡಲಿಲ್ಲ. ಆ ಜನರು ತಮ್ಮ ದುಷ್ಟತನ
ವನ್ನು ನಿಲ್ಲಿಸಲಿಲ್ಲ. ಅವರು ಬೇರೆ ದೇವರುಗಳಿಗೆ ಬಲಿ
ಕೊಡುವುದನ್ನು ನಿಲ್ಲಿಸಲಿಲ್ಲ. 6ಆದುದರಿಂದ ಆ ಜನರ
ಮೇಲೆ ನಾನು ನನ್ನ ಕೋಪವನ್ನು ವ್ಯಕ್ತಪಡಿಸಿದೆ. ನಾನು
ಯೆಹೂದದ ಪಟ್ಟಣಗಳನ್ನು ಮತ್ತು ಜೆರುಸಲೇಮಿನ
ಬೀದಿಗಳನ್ನು ದಂಡಿಸಿದೆ. ನನ್ನ ಕೋಪವು ಜೆರುಸಲೇಮ್
ನಗರವನ್ನು ಮತ್ತು ಯೆಹೂದದ ಪಟ್ಟಣಗಳನ್ನು ಈಗಿದ್ದ
ಕಲ್ಲಿನ ದಿಬ್ಬಗಳನ್ನಾಗಿ ಮಾಡಿತು.''

7ಇಸ್ರೇಲಿನ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ಹೀಗೆ ಹೇಳುವನು: ''ವಿಗ್ರಹಗಳ ಪೂಜೆ
ಮಾಡಿ ನಿಮ್ಮನ್ನು ನೀವೇ ಏಕೆ ತೊಂದರೆಗೀಡು ಮಾಡಿ
ಕೊಳ್ಳುವಿರಿ. ನೀವು ಯೆಹೂದ ಕುಟುಂಬದಿಂದ ಗಂಡಸ
ರನ್ನು, ಹೆಂಗಸರನ್ನು, ಮಕ್ಕಳನ್ನು ಮತ್ತು ಕೂಸುಗಳನ್ನು
ಅಗಲಿಸುತ್ತಿದ್ದೀರಿ. ಯೆಹೂದ ಕುಲದಿಂದ ಯಾರೂ
ಉಳಿಯದಂತೆ ಮಾಡುತ್ತಿದ್ದೀರಿ. 8ನೀವು ವಿಗ್ರಹಗಳನ್ನು
ಮಾಡಿ ನನ್ನನ್ನು ಏಕೆ ಸಿಟ್ಟಿಗೆಬ್ಬಿಸುವಿರಿ? ಈಗ ನೀವು
ಈಜಿಪ್ಟಿನಲ್ಲಿ ವಾಸಮಾಡುತ್ತಿರುವಿರಿ. ಈಗ ಈಜಿಪ್ಟಿನ
ಸುಳ್ಳುದೇವರುಗಳಿಗೆ ನೈವೇದ್ಯವನ್ನು ಅರ್ಪಿಸಿ ನನಗೆ
ಕೋಪ ಬರುವಂತೆ ಮಾಡುತ್ತಿರುವಿರಿ. ನೀವೇ ನಿಮ್ಮನ್ನು
ನಾಶ ಮಾಡಿಕೊಳ್ಳುವಿರಿ. ಅದು ನಿಮ್ಮ ತಪ್ಪೇ ಆಗುವುದು.
ಬೇರೆ ಜನಾಂಗದವರು ನಿಂದಿಸುವಂತೆ ನಿಮ್ಮನ್ನು ನೀವು
ಮಾಡಿಕೊಳ್ಳುತ್ತಿದ್ದೀರಿ. ಭೂಮಂಡಲದ ಎಲ್ಲಾ ಜನಾಂಗ
ಗಳು ನಿಮ್ಮನ್ನು ತಮಾಷೆ ಮಾಡುವಂತಾಗುವುದು. 9ನಿಮ್ಮ
ಪೂರ್ವಿಕರು ಮಾಡಿದ್ದ ದುಷ್ಟತನವನ್ನು ನೀವು ಮರೆತು
ಬಿಟ್ಟಿರಾ? ಯೆಹೂದದ ರಾಜರು ಮತ್ತು ರಾಣಿಯರು
ಮಾಡಿದ್ದ ದುಷ್ಟತನವನ್ನು ನೀವು ಮರೆತುಬಿಟ್ಟಿರುವಿರಾ?
ನೀವು ಮತ್ತು ನಿಮ್ಮ ಪತ್ನಿಯರು ಯೆಹೂದದಲ್ಲಿ ಮತ್ತು
ಜೆರುಸಲೇಮಿನ ಬೀದಿಗಳಲ್ಲಿ ಮಾಡಿದ ದುಷ್ಟತನವನ್ನು
ಮರೆತುಬಿಟ್ಟಿರಾ? 10ಇಂದಿನವರೆಗೂ ಯೆಹೂದದ ಜನ
ತಮ್ಮನ್ನು ವಿನೀತರನ್ನಾಗಿ ಮಾಡಿಕೊಂಡಿಲ್ಲ. ಅವರು ನನ್ನ
ಬಗ್ಗೆ ಎಳ್ಳಷ್ಟು ಗೌರವವನ್ನು ತೋರಿಸಿಲ್ಲ. ಆ ಜನರು ನನ್ನ
ಉಪದೇಶಗಳಂತೆ ನಡೆದುಕೊಂಡಿಲ್ಲ. ನಾನು ನಿಮಗೂ
ಮತ್ತು ನಿಮ್ಮ ಪೂರ್ವಿಕರಿಗೂ ಕೊಟ್ಟ ಧರ್ಮೋಪದೇಶ
ಗಳನ್ನು ಅವರು ಪಾಲಿಸಲಿಲ್ಲ.''

11ಆದುದರಿಂದ ಇಸ್ರೇಲರ ದೇವರೂ ಸರ್ವಶಕ್ತನೂ
ಆಗಿರುವ ಯೆಹೋವನು ಹೀಗೆ ಹೇಳುವನು: ''ನಿಮಗೆ
ಭಯಾನಕವಾದ ಕೇಡನ್ನು ಉಂಟುಮಾಡಬೇಕೆಂದು
ನಾನು ನಿಶ್ಚಯ ಮಾಡಿದ್ದೇನೆ. ನಾನು ಯೆಹೂದದ ಇಡೀ
ಕುಲವನ್ನು ನಾಶಮಾಡುವೆನು. 12ಯೆಹೂದದಲ್ಲಿ ಅಳಿ
ದುಳಿದ ಕೆಲವು ಜನರಿದ್ದರು. ಆ ಜನರು ಈಜಿಪ್ಟಿನಲ್ಲಿ
ನೆಲೆಸಲು ಬಂದರು. ಆದರೆ ನಾನು ಯೆಹೂದ ಕುಲದ
ಆ ಕೆಲವು ಅಳಿದುಳಿದವರನ್ನು ನಾಶಮಾಡುವೆನು. ಅವರು
ಕತ್ತಿಗಳಿಂದ ಕೊಲ್ಲಲ್ಪಡುವರು; ಹಸಿವಿನಿಂದ ಸತ್ತು
ಹೋಗುವರು. ಬೇರೆ ಜನಾಂಗಗಳ ಜನರು ಅವರ ಬಗ್ಗೆ
ನಿಂದಿಸುವಂತೆ ಅವರ ಸ್ಥಿತಿ ಆಗುವುದು. ಅವರಿಗೆ
ಉಂಟಾದ ದುರ್ಗತಿಯನ್ನು ನೋಡಿ ಬೇರೆ ಜನಾಂಗದ
ಜನರು ಭಯಪಡುವರು. ಆ ಜನರು ಶಾಪದ ಶಬ್ದ
ವಾಗುವರು. ಬೇರೆ ಜನಾಂಗದವರು ಯೆಹೂದದ ಆ

ಜನರಿಗೆ ಅಪಮಾನ ಮಾಡುವರು. 13ಈಜಿಪ್ಟಿನಲ್ಲಿ ವಾಸಿಸಲು ಹೋದ ಜನರನ್ನು ನಾನು ದಂಡಿಸುವೆನು. ಅವರನ್ನು ದಂಡಿಸಲು ನಾನು ಖಡ್ಗಗಳನ್ನು, ಹಸಿವನ್ನು ಮತ್ತು ಭಯಂಕರವಾದ ವ್ಯಾಧಿಗಳನ್ನು ಬಳಸುವೆನು. ನಾನು ಜೆರುಸಲೇಮ್ ನಗರವನ್ನು ದಂಡಿಸಿದಂತೆಯೇ ಅವರನ್ನು ದಂಡಿಸುವೆನು. 14ಈಜಿಪ್ಟಿಗೆ ವಲಸೆಹೋದ ಕೆಲವೇ ಯೆಹೂದದ ಜನರು ಅಳಿದುಳಿದವರಾಗಿದ್ದಾರೆ. ಒಬ್ಬನೂ ಕೂಡ ನನ್ನ ಶಿಕ್ಷೆಯಿಂದ ತಪ್ಪಿಸಿಕೊಳ್ಳಲಾರನು. ಅವರಲ್ಲಿ ಒಬ್ಬನೂ ಜೀವಂತವಾಗಿ ಯೆಹೂದಕ್ಕೆ ಹಿಂತಿರುಗಿ ಬರಲಾರನು. ಆ ಜನರು ಯೆಹೂದಕ್ಕೆ ಹಿಂತಿರುಗಿ ಬಂದು ಅಲ್ಲಿ ವಾಸಮಾಡಬಯಸುವರು ಆದರೆ ತಪ್ಪಿಸಿಕೊಂಡ ಬಹು ಸ್ವಲ್ಪ ಜನರನ್ನು ಬಿಟ್ಟು ಮಿಕ್ಕವರಾರೂ ಯೆಹೂದಕ್ಕೆ ಹಿಂತಿರುಗುವದಿಲ್ಲ.’’

15ಈಜಿಪ್ಟಿನಲ್ಲಿ ವಾಸಮಾಡುತ್ತಿರುವ ಅನೇಕ ಯೆಹೂದಿ ಸ್ತ್ರೀಯರು ಬೇರೆ ದೇವರುಗಳಿಗೆ ನೈವೇದ್ಯಗಳನ್ನು ಅರ್ಪಿಸುತ್ತಿದ್ದರು. ಅವರ ಗಂಡಂದಿರಿಗೆ ಅದು ಗೊತ್ತಿತ್ತು ಆದರೆ ಅವರು ಅದನ್ನು ತಡೆಯಲಿಲ್ಲ. ಯೆಹೂದದ ಜನರ ಒಂದು ದೊಡ್ಡ ಗುಂಪು ಸೇರಿತ್ತು. ಅವರು ಈಜಿಪ್ಟಿನ ದಕ್ಷಿಣಭಾಗದಲ್ಲಿ ವಾಸಿಸುವ ಯೆಹೂದಿಗಳಾಗಿದ್ದರು. ಅನ್ಯದೇವರುಗಳಿಗೆ ನೈವೇದ್ಯವನ್ನು ಅರ್ಪಿಸುತ್ತಿದ್ದ ಸ್ತ್ರೀಯರ ಗಂಡಂದಿರು ಯೆರೆಮೀಯನಿಗೆ ಹೀಗೆಂದರು: 16‘‘ನೀನು ನಮಗೆ ತಿಳಿಸಿದ ಯೆಹೋವನ ಸಂದೇಶವನ್ನು ಕೇಳಿಸಿಕೊಳ್ಳುವದಿಲ್ಲ. 17ನಾವು ಗಗನದ ಒಡತಿಗೆ ನೈವೇದ್ಯವನ್ನು ಅರ್ಪಿಸುವದಾಗಿ ಹರಕೆ ಮಾಡಿದ್ದೇವೆ ಮತ್ತು ನಮ್ಮ ಹರಕೆಗಳನ್ನೆಲ್ಲ ಪೂರೈಸುತ್ತೇವೆ. ನಾವು ನೈವೇದ್ಯವನ್ನು ಕೊಡುತ್ತೇವೆ ಮತ್ತು ಅವಳ ಪೂಜೆಗಾಗಿ ಪಾನನೈವೇದ್ಯವನ್ನು ಅರ್ಪಿಸುತ್ತೇವೆ. ನಾವು ಮೊದಲು ಹಾಗೆಯೇ ಮಾಡಿದ್ದೇವೆ. ನಮ್ಮ ಪೂರ್ವಿಕರು, ನಮ್ಮ ರಾಜರು, ನಮ್ಮ ಅಧಿಕಾರಿಗಳು ಮೊದಲು ಮಾಡಿದಂತೆಯೇ, ನಾವೆಲ್ಲರೂ ಜೆರುಸಲೇಮಿನ ಬೀದಿಗಳಲ್ಲಿ ಮತ್ತು ಯೆಹೂ ದದ ಪಟ್ಟಣಗಳಲ್ಲಿ ಮಾಡಿದ್ದೆವು. ನಾವು ಗಗನದ ಒಡತಿ ಯನ್ನು ಪೂಜಿಸುವ ಕಾಲದಲ್ಲಿ ನಮ್ಮಲ್ಲಿ ಸಾಕಷ್ಟು ಆಹಾರ ವಿತ್ತು. ನಾವು ಜಯಶೀಲರಾಗಿದ್ದೆವು. ನಮಗೆ ಕೆಟ್ಟದ್ದೇನೂ ಆಗಿರಲಿಲ್ಲ. 18ಆ ಮೇಲೆ ನಾವು ಗಗನದ ರಾಣಿಗೆ ನೈವೇದ್ಯ ಅರ್ಪಿಸುವದನ್ನು ಮತ್ತು ಪಾನ ನೈವೇದ್ಯವನ್ನು ನಿಲ್ಲಿಸಿದೆವು. ಅವಳನ್ನು ಪೂಜಿಸದೆ ಹಾಗೆಲ್ಲ ಮಾಡುವದನ್ನು ನಿಲ್ಲಿಸಿದಂದಿನಿಂದ ನಮಗೆ ಸಮಸ್ಯೆಗಳುಂಟಾದವು. ನಮ್ಮ ಜನರು ಖಡ್ಗ ಮತ್ತು ಹಸಿವುಗಳಿಗೆ ಬಲಿಯಾದರು.’’

19ಆಮೇಲೆ ಹೆಂಗಸರು ಮಾತನಾಡಿದರು. ಅವರು ಯೆರೆಮೀಯನಿಗೆ ಹೀಗೆ ಹೇಳಿದರು, ‘‘ನಾವು ಏನು ಮಾಡುತ್ತಿದ್ದೆವೆಂಬುದು ನಮ್ಮ ಗಂಡಂದಿರಿಗೆ ಗೊತ್ತಿತ್ತು. ಗಗನದ ಒಡತಿಗೆ ನೈವೇದ್ಯವನ್ನು ಮಾಡುವದಕ್ಕೆ ನಾವು ಅವರ ಅಪ್ಪಣೆಯನ್ನು ಪಡೆದಿದ್ದೆವು. ಅವಳಿಗೆ ಪಾನ ನೈವೇದ್ಯವನ್ನು ಮಾಡುವದಕ್ಕೂ ಅವರ ಅಪ್ಪಣೆಯನ್ನು ಪಡೆದಿದ್ದೆವು. ನಾವು ಅವಳ ಆಕಾರದ ಹೋಳಿಗೆಯನ್ನು ಮಾಡುತ್ತಿದ್ದೆವೆಂಬುದೂ ನಮ್ಮ ಗಂಡಂದಿರಿಗೆ ಗೊತ್ತಿತ್ತು.’’

20ಆಗ ಯೆರೆಮೀಯನು ತನಗೆ ಉತ್ತರ ಕೊಟ್ಟ ಆ ಎಲ್ಲಾ ಸ್ತ್ರೀ ಪುರುಷರೊಂದಿಗೆ ಮಾತನಾಡಿ ಹೀಗೆ ಹೇಳಿದನು: 21‘‘ನೀವು ಯೆಹೂದದ ಪಟ್ಟಣಗಳಲ್ಲಿ ಮತ್ತು ಜೆರುಸಲೇಮಿನ ಬೀದಿಗಳಲ್ಲಿ ನೈವೇದ್ಯಗಳನ್ನು ಅರ್ಪಿಸಿದ ಸಂಗತಿ ಯೆಹೋವನ ಜ್ಞಾಪಕದಲ್ಲಿದೆ. ಅದನ್ನು ಮಾಡಿದ್ದೇ ನೀವು ಮತ್ತು ನಿಮ್ಮ ಪೂರ್ವಿಕರು, ನಿಮ್ಮ ರಾಜರು, ನಿಮ್ಮ ಅಧಿಕಾರಿಗಳು ಮತ್ತು ನಿಮ್ಮ ಪ್ರದೇಶದ ಜನರು. ನೀವು ಮಾಡಿದ್ದನ್ನೆಲ್ಲಾ ಆತನು ಜ್ಞಾಪಿಸಿಕೊಂಡನು; ತನ್ನ ನೆನಪಿಗೆ ತಂದುಕೊಂಡನು. 22ಯೆಹೋವನು ಇನ್ನು ಮುಂದೆ ತಾಳ್ಮೆಯಿಂದ ಇರಲಾರನು. ನೀವು ಮಾಡಿದ ಅಸಹ್ಯ ಕೃತ್ಯಗಳನ್ನು ಯೆಹೋವನು ದ್ವೇಷಿಸುತ್ತಾನೆ. ಆದುದರಿಂದ ಆತನು ನಿಮ್ಮ ದೇಶವನ್ನು ಬರಿದಾದ ಮರುಭೂಮಿಯನ್ನಾಗಿ ಮಾಡಿದ್ದಾನೆ. ಈಗ ಅಲ್ಲಿ ಯಾರೂ ವಾಸಿಸುವದಿಲ್ಲ. ಬೇರೆಯವರು ಆ ದೇಶದ ಬಗ್ಗೆ ಕೆಟ್ಟ ಮಾತುಗಳನ್ನಾಡುತ್ತಾರೆ. 23ನೀವು ಬೇರೆ ದೇವರುಗಳಿಗೆ ನೈವೇದ್ಯವನ್ನು ಅರ್ಪಿಸಿದ್ದಕ್ಕಾಗಿ ಆ ಕೇಡುಗಳೆಲ್ಲಾ ಸಂಭವಿಸಿದವು. ನೀವು ಯೆಹೋವನ ವಿರುದ್ಧ ಪಾಪ ಮಾಡಿದಿರಿ. ನೀವು ಯೆಹೋವನ ಆಜ್ಞಾಪಾಲನೆ ಮಾಡಲಿಲ್ಲ. ನೀವು ಅವನ ಉಪದೇಶಗಳನ್ನಾಗಲಿ ಅಥವಾ ಅವನು ಬೋಧಿಸಿದ ಧರ್ಮೋಪದೇಶಗಳನ್ನಾಗಲಿ ಅನುಸರಿಸಲಿಲ್ಲ. ನೀವು ಮಾಡಿಕೊಂಡ ಒಡಂಬಡಿಕೆಯಂತೆ* ನಡೆಯಲಿಲ್ಲ.’’

24ಆಮೇಲೆ ಯೆರೆಮೀಯನು ಆ ಎಲ್ಲಾ ಸ್ತ್ರೀ ಪುರುಷರೊಂದಿಗೆ ಮಾತನಾಡಿದನು. ಯೆರೆಮೀಯನು ಹೀಗೆ ಹೇಳಿದನು: ‘‘ಈಗ ಈಜಿಪ್ಟಿನಲ್ಲಿರುವ ಎಲ್ಲಾ ಯೆಹೂದೀಯರೇ, ಯೆಹೋವನ ಸಂದೇಶವನ್ನು ಕೇಳಿರಿ: 25ಇಸ್ರೇಲರ ಸರ್ವಶಕ್ತನಾದ ಯೆಹೋವನು ಹೀಗೆ ಹೇಳುತ್ತಾನೆ: ಸ್ತ್ರೀಯರೇ* ‘ಹರಕೆ ಹೊತ್ತಂತೆ ನಡೆದುಕೊಂಡೆವು. ನಾವು ಮಾಡಿದ ಹರಕೆಗಳನ್ನು ಈಡೇರಿಸುವೆವು. ನಾವು ಗಗನದ ಒಡತಿಗೆ ನೈವೇದ್ಯವನ್ನು ಮತ್ತು ಪಾನ ನೈವೇದ್ಯವನ್ನು ಮಾಡುತ್ತೇವೆಂದು ಹರಕೆಹೊತ್ತಿದ್ದೆವು’ ಎಂದು ನೀವು ಹೇಳಿದ ಹಾಗೆ ಮಾಡಿರಿ. ನೀವು ಹರಕೆ ಹೊತ್ತ ಹಾಗೆ ಮಾಡಿರಿ. ನಿಮ್ಮ ಹರಕೆಗಳನ್ನು ಪೂರ್ಣಗೊಳಿಸಿರಿ. 26ಆದರೆ, ಈಜಿಪ್ಟಿನಲ್ಲಿ ವಾಸಮಾಡುತ್ತಿರುವ ಎಲ್ಲಾ ಯೆಹೂದಿಯರೇ ಯೆಹೋವನ ಸಂದೇಶವನ್ನು

---

**ಒಡಂಬಡಿಕೆ** ಬಹುಶಃ ಇದು ದೇವರ ಮತ್ತು ಇಸ್ರೇಲಿಯರ ನಡುವೆ ಆದ ಒಡಂಬಡಿಕೆ.

**ಸ್ತ್ರೀಯರೇ** ನೀವು ಮತ್ತು ನಿಮ್ಮ ಹೆಂಡತಿಯರು.

ಕೇಳಿರಿ. 'ನಾನು ಆಣೆ ಮಾಡಿ ಹೀಗೆ ಹೇಳುತ್ತೇನೆ. ಈಜಿಪ್ಟಿನಲ್ಲಿ ವಾಸಮಾಡುತ್ತಿರುವ ಯೆಹೂದಿಯರಲ್ಲಿ ಯಾರೊಬ್ಬರೂ ಇನ್ನು ಮುಂದೆ ನನ್ನ ಹೆಸರಿನ ಮೇಲೆ ಆಣೆಯಿಟ್ಟು ಹೇಳಲಾರರು ಎಂದು ನಾನು ನನ್ನ ಮಹತ್ತಾದ ನಾಮದ ಮೇಲೆ ಆಣೆಯಿಟ್ಟುಕೊಂಡು ಹೇಳುತ್ತೇನೆ. ಇನ್ನು ಮುಂದೆ ಎಂದೂ ಅವರು 'ದೇವರ ಆಣೆಯಾಗಿ' ಎಂದು ಹೇಳಲಾರರು.
27''ನಾನು ಯೆಹೂದದ ಜನರನ್ನು ಗಮನಿಸುತ್ತಿರುವುದು ಅವರನ್ನು ಕಾಪಾಡುವುದಕ್ಕಲ್ಲ. ನಾನು ಅವರನ್ನು ಗಮನಿಸುತ್ತಿರುವುದು ಅವರಿಗೆ ಕೇಡು ಮಾಡುವುದಕ್ಕಾಗಿ. ಈಜಿಪ್ಟಿನಲ್ಲಿ ವಾಸಿಸುವ ಯೆಹೂದಿಯರು ಹಸಿವಿನಿಂದ ಸತ್ತು ಹೋಗುವರು ಮತ್ತು ಖಡ್ಗಕ್ಕೆ ಬಲಿಯಾಗುವರು. ಅವರು ನಿರ್ನಾಮವಾಗುವವರೆಗೆ ಸಾಯುತ್ತಿರುವರು.
28ಕೆಲವು ಯೆಹೂದಿಯರು ಖಡ್ಗದಿಂದ ತಪ್ಪಿಸಿಕೊಳ್ಳುವರು. ಅವರು ಈಜಿಪ್ಟಿನಿಂದ ಯೆಹೂದಕ್ಕೆ ಹಿಂದಿರುಗಿ ಬರು ವರು. ಆದರೆ ಹಾಗೆ ತಪ್ಪಿಸಿಕೊಳ್ಳುವ ಯೆಹೂದಿಯರು ಬಹು ಕಡಿಮೆ. ಆಗ ಈಜಿಪ್ಟಿಗೆ ವಲಸೆ ಬಂದ ಆ ಅಳಿದುಳಿದ ಯೆಹೂದಿಯರಿಗೆ ಯಾರ ಮಾತು ನಿಜವೆಂಬುದು ತಿಳಿದುಬರುತ್ತದೆ. ನನ್ನ ಮಾತು ನಿಜವಾಯಿತೋ ಅಥವಾ ಅವರ ಮಾತು ನಿಜವಾಯಿತೋ ಎಂಬುದು ಅವರಿಗೆ ಗೊತ್ತಾಗುತ್ತದೆ.
29ನಾನು ನಿಮ್ಮನ್ನು ಇಲ್ಲಿ ಈಜಿಪ್ಟಿನಲ್ಲಿ ದಂಡಿಸುತ್ತೇನೆಂದು ಪ್ರಮಾಣ ಮಾಡುತ್ತೇನೆ. ಆಗ ನಾನು ನಿಮ್ಮನ್ನು ದಂಡಿಸುವೆನೆಂದು ಮಾಡಿದ ಪ್ರತಿಜ್ಞೆ ಈಡೇರುವದೆಂದು ನಿಮಗೆ ತಿಳಿಯುವುದು.' ಇದು ಯೆಹೋವನ ನುಡಿ.
30ನಾನು ಹೇಳಿದಂತೆ ಮಾಡುವೆನೆಂಬುದಕ್ಕೆ ಪ್ರಮಾಣ ಇದು. ಯೆಹೋವನು ಹೀಗೆ ಹೇಳಿದನು. 'ಫರೋಹ ಹೊಫ್ರನೆಂಬುವನು ಈಜಿಪ್ಟಿನ ರಾಜನಾಗಿದ್ದಾನೆ. ಅವನ ಶತ್ರುಗಳು ಅವನನ್ನು ಕೊಲ್ಲಬಯಸುತ್ತಾರೆ. ನಾನು ಫರೋಹ ಹೊಫ್ರನನ್ನು ಅವನ ಶತ್ರುಗಳಿಗೆ ಒಪ್ಪಿಸುತ್ತೇನೆ. ಚಿದ್ಕೀಯನು ಯೆಹೂದದ ರಾಜನಾಗಿದ್ದನು. ನೆಬೂಕದ್ನೆಚ್ಚರನು ಚಿದ್ಕೀಯನ ವೈರಿಯಾಗಿದ್ದನು. ನಾನು ಚಿದ್ಕೀಯನನ್ನು ಅವನ ಶತ್ರುವಿನ ಕೈಗೆ ಒಪ್ಪಿಸಿದೆ. ಅದೇ ರೀತಿ ನಾನು ಫರೋಹ ಹೊಫ್ರನನ್ನು ಅವನ ವೈರಿಯ ಕೈಗೆ ಒಪ್ಪಿಸುತ್ತೇನೆ.'''

## ಬಾರೂಕನಿಗೆ ಒಂದು ಸಂದೇಶ

45 ಯೆಹೋಯಾಕೀಮನು ಯೋಷೀಯನ ಮಗ. ಯೆಹೋಯಾಕೀಮನು ಯೆಹೂದದ ರಾಜನಾದ ನಾಲ್ಕನೇ ವರ್ಷದಲ್ಲಿ ಪ್ರವಾದಿಯಾದ ಯೆರೆಮೀಯನು ನೇರೀಯನ ಮಗನಾದ ಬಾರೂಕನಿಗೆ ಹೀಗೆ ಹೇಳಿದನು. ಬಾರೂಕನು ಅದನ್ನು ಒಂದು ಸುರುಳಿಯ ಮೇಲೆ ಬರೆದನು. ಯೆರೆಮೀಯನು ಬಾರೂಕನಿಗೆ ಹೇಳಿದ್ದು ಹೀಗೆ:
2''ಇಸ್ರೇಲಿನ ದೇವರಾದ ನಮ್ಮ ಯೆಹೋವನು ಹೀಗೆ ಹೇಳುತ್ತಾನೆ:
3'ಬಾರೂಕನೇ, ನನಗೆ ತುಂಬ ತೊಂದರೆಯಾಗಿದೆ. ನನ್ನ ನೋವಿನೊಂದಿಗೆ ಯೆಹೋವನು ನನಗೆ ದುಃಖವನ್ನು ಕೊಟ್ಟಿದ್ದಾನೆ. ನಾನು ಬಹಳ ದಣಿದಿದ್ದೇನೆ. ನನ್ನ ಸಂಕಟಗಳಿಂದ ಸೊರಗಿ ಹೋಗಿದ್ದೇನೆ. ವಿಶ್ರಾಂತಿಯನ್ನು ಕಾಣಲೂ ನನಗೆ ಸಾಧ್ಯವಿಲ್ಲ'' ಎಂದು ಹೇಳಿರುವೆ.
4''ಯೆರೆಮೀಯನೇ, 'ಯೆಹೋವನು ಹೀಗೆ ಹೇಳುತ್ತಾನೆಂದು ಬಾರೂಕನಿಗೆ ತಿಳಿಸು. ನಾನು ಕಟ್ಟಿದ್ದನ್ನು ಕೆಡಿಸುತ್ತೇನೆ. ನಾನು ನೆಟ್ಟಿದ್ದನ್ನು ಕಿತ್ತು ಎಸೆಯುತ್ತೇನೆ. ನಾನು ಈ ರೀತಿ ಯೆಹೂದದಲ್ಲಿ ಎಲ್ಲಾ ಕಡೆಗೂ ಮಾಡುತ್ತೇನೆ.
5ಬಾರೂಕನೇ, ನೀನು ದೊಡ್ಡ ಪದವಿಯನ್ನು ನಿರೀಕ್ಷಿಸುತ್ತಿರುವೆ. ಆದರೆ ನೀನು ಅದನ್ನು ನಿರೀಕ್ಷಿಸಬೇಡ. ಏಕೆಂದರೆ ನಾನು ಎಲ್ಲರಿಗೆ ಭಯಂಕರವಾದ ಸಂಗತಿಗಳನ್ನು ಬರಮಾಡುವೆನು.' ಯೆಹೋವನು ಹೀಗೆ ಹೇಳಿದನು, 'ನೀನು ಅನೇಕ ಸ್ಥಳಗಳಿಗೆ ಹೋಗಬೇಕಾಗಬಹುದು. ಆದರೆ ನೀನು ಎಲ್ಲಿ ಹೋದರೂ ಪ್ರಾಣ ಉಳಿಸಿಕೊಂಡು ಪಾರಾಗುವಂತೆ ನಾನು ಮಾಡುತ್ತೇನೆ.'''

## ಜನಾಂಗಗಳ ವಿಷಯವಾಗಿ ಯೆಹೋವನ ಸಂದೇಶಗಳು

46 ಈ ಸಂದೇಶಗಳು ಪ್ರವಾದಿಯಾದ ಯೆರೆಮೀಯನಿಗೆ ಬಂದವು. ಈ ಸಂದೇಶಗಳು ವಿವಿಧ ಜನಾಂಗಗಳ ಬಗ್ಗೆ ಇವೆ.

## ಈಜಿಪ್ಟಿನ ಬಗ್ಗೆ ಸಂದೇಶ

2ಈ ಸಂದೇಶವು ಈಜಿಪ್ಟ್ ಜನಾಂಗದ ಬಗ್ಗೆ ಇದೆ. ಈ ಸಂದೇಶವು ಫರೋಹನೆಕೋವಿನ ಸೈನ್ಯದ ಬಗ್ಗೆ ಇದೆ. ಫರೋಹನೆಕೋವು ಈಜಿಪ್ಟಿನ ರಾಜನಾಗಿದ್ದನು. ಅವನ ಸೈನ್ಯವನ್ನು ಕರ್ಕೆಮೀಷ್ ಪಟ್ಟಣದಲ್ಲಿ ಸೋಲಿಸಲಾಯಿತು. ಕರ್ಕೆಮೀಷ್ ಪಟ್ಟಣವು ಯೂಫ್ರೇಟೀಸ್ ನದಿಯ ದಂಡೆಯ ಮೇಲಿದೆ. ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನು ಯೆಹೂದದಲ್ಲಿ ಯೆಹೋಯಾಕೀಮನ ಆಳ್ವಿಕೆಯ ನಾಲ್ಕನೆಯ ವರ್ಷದಲ್ಲಿ ಫರೋಹನೆಕೋವಿನ ಸೈನ್ಯವನ್ನು ಕರ್ಕೆಮೀಷಿನಲ್ಲಿ ಸೋಲಿಸಿದನು. ಯೆಹೋಯಾಕೀಮನು ರಾಜನಾದ ಯೋಷೀಯನ ಮಗನಾಗಿದ್ದನು. ಈಜಿಪ್ಟಿಗೆ ಯೆಹೋವನ ಸಂದೇಶ ಹೀಗಿತ್ತು:

3 ''ನಿಮ್ಮ ದೊಡ್ಡ ಮತ್ತು ಸಣ್ಣ ಗುರಾಣಿಗಳನ್ನು ಸಿದ್ಧಪಡಿಸಿಕೊಳ್ಳಿ, ಯುದ್ಧಕ್ಕೆ ಹೊರಡಿರಿ.

4 ಕುದುರೆಗಳನ್ನು ಸಜ್ಜುಗೊಳಿಸಿರಿ, ಸೈನಿಕರೇ, ನಿಮ್ಮ
ಕುದುರೆಯ ಮೇಲೆ ಹತ್ತಿರಿ, ಯುದ್ಧಕ್ಕಾಗಿ ನಿಮ್ಮ
ನಿಮ್ಮ ಸ್ಥಾನಗಳಿಗೆ ಹೋಗಿರಿ. ನಿಮ್ಮ ಶಿರಸ್ತ್ರಾಣ
ಗಳನ್ನು ಧರಿಸಿರಿ. ನಿಮ್ಮ ಭರ್ಜಿಗಳನ್ನು ಚೂಪು
ಗೊಳಿಸಿರಿ. ನಿಮ್ಮ ಕವಚಗಳನ್ನು ಧರಿಸಿರಿ.
5 ನಾನು ನೋಡುತ್ತಿರುವುದೇನು? ಸೈನ್ಯವು ಗಾಬರಿ
ಪಟ್ಟಿದೆ. ಸೈನಿಕರು ಓಡಿಹೋಗುತ್ತಿದ್ದಾರೆ. ಅವರ
ಶೂರ ಸೈನಿಕರು ಸೋತಿದ್ದಾರೆ. ಅವರು ಅವಸರ
ದಿಂದ ಓಡಿಹೋಗುತ್ತಿದ್ದಾರೆ. ಅವರು ಹಿಂದಕ್ಕೆ
ತಿರುಗಿ ಸಹ ನೋಡುತ್ತಿಲ್ಲ. ಎಲ್ಲಾ ಕಡೆಗೂ ಭೀತಿ
ಆವರಿಸಿಕೊಂಡಿದೆ'' ಯೆಹೋವನು ಹೀಗೆಂದನು.
6 ''ವೇಗಶಾಲಿಗಳೂ ಓಡಿಹೋಗಲಾರರು. ಶೂರ
ಸೈನಿಕರೂ ತಪ್ಪಿಸಿಕೊಳ್ಳಲಾರರು. ಅವರೆಲ್ಲರೂ
ಎಡವಿ ಬಿದ್ದುಬಿಡುವರು. ಇದೆಲ್ಲ ಉತ್ತರದಲ್ಲಿ
ಯೂಫ್ರೇಟೀಸ್ ನದಿಯ ಹತ್ತಿರ ನಡೆಯುವುದು.
7 ನೈಲ್ ನದಿಯಂತೆ ಯಾರು ಬರುತ್ತಿರುವರು? ಶಕ್ತಿ
ಶಾಲಿಯಾದ ಮತ್ತು ರಭಸದಿಂದ ಹರಿಯುವ ನದಿ
ಯಂತೆ ಯಾರು ಬರುತ್ತಿರುವರು?
8 ಭೋರ್ಗರೆಯುವ ನೈಲ್ ನದಿಯಂತೆ ಈಜಿಪ್ಟ್
ಬರುತ್ತಿದೆ. ಶಕ್ತಿಶಾಲಿಯಾದ ಮತ್ತು ರಭಸದಿಂದ
ಹರಿಯುವ ನದಿಯಂತೆ ಬರುತ್ತಿದೆ, ಈಜಿಪ್ಟ್,
ಈಜಿಪ್ಟ್, 'ನಾನು ಬಂದು ಭೂಮಿಯ ಮೇಲೆಲ್ಲ
ವ್ಯಾಪಿಸಿಕೊಳ್ಳುವೆನು. ನಾನು ನಗರಗಳನ್ನೂ
ಅಲ್ಲಿದ್ದ ಜನರನ್ನೂ ನಾಶಮಾಡುವೆನು' ಎಂದು
ಹೇಳುತ್ತಿದೆ.
9 ಅಶ್ವಾರೋಹಿಗಳೇ, ಯುದ್ಧದಲ್ಲಿ ಧುಮುಕಿರಿ,
ಸಾರಥಿಗಳೇ, ರಥಗಳನ್ನು ವೇಗವಾಗಿ ಓಡಿಸಿರಿ,
ಶೂರ ಸೈನಿಕರೇ, ಮುನ್ನುಗ್ಗಿರಿ; ಕೂಷ್ಯ ಮತ್ತು
ಪೂಟ್ಯ ಸೈನಿಕರೇ ನಿಮ್ಮ ಗುರಾಣಿಗಳನ್ನು ಹಿಡಿದು
ಕೊಂಡು ಹೋಗಿರಿ. ಲೂದ್ಯ ಸೈನಿಕರೇ, ನಿಮ್ಮ
ಬಿಲ್ಲುಗಳನ್ನು ಉಪಯೋಗಿಸಿರಿ.
10 ''ಆದರೆ ಆ ದಿನ ನಮ್ಮ ಒಡೆಯನೂ ಸರ್ವಶಕ್ತನೂ
ಆಗಿರುವ ಯೆಹೋವನು ಗೆಲ್ಲುವನು. ಆಗ ಆ ಜನ
ರಿಗೆ ತಕ್ಕ ಶಿಕ್ಷೆಯನ್ನು ಕೊಡುವನು. ಯೆಹೋವನ
ವೈರಿಗಳು ತಕ್ಕ ಶಿಕ್ಷೆಯನ್ನು ಅನುಭವಿಸುವರು.
ಖಡ್ಗವು ಸರ್ವರನ್ನು ಕೊಲೆ ಮಾಡುವುದು. ಖಡ್ಗವು
ತನ್ನ ರಕ್ತದ ದಾಹ ತೀರುವವರೆಗೂ ಕೊಲೆ ಮಾಡು
ವುದು. ನಮ್ಮ ಒಡೆಯನೂ ಸರ್ವಶಕ್ತನೂ ಆಗಿ
ರುವ ಯೆಹೋವನಿಗೆ ಬಲಿ ನಡೆಯ ಬೇಕಾಗಿರು
ವುದರಿಂದ ಹೀಗೆಲ್ಲ ಆಗುವುದು. ಈಜಿಪ್ಟಿನ ಸೈನ್ಯ
ವನ್ನು ಉತ್ತರದಲ್ಲಿ ಯೂಫ್ರೇಟೀಸ್ ನದಿಯ
ಹತ್ತಿರ ಬಲಿಯಾಗಿ ಕೊಡಲಾಗುವುದು.
11 ''ಈಜಿಪ್ಟೇ, ಗಿಲ್ಯಾದಿಗೆ ಹೋಗಿ ಔಷಧಿಯನ್ನು
ತೆಗೆದುಕೊಂಡು ಬಾ. ನೀನು ಬಗೆಬಗೆಯ ಔಷಧಿ
ಗಳನ್ನು ಉಪಯೋಗಿಸಬಹುದು. ಆದರೆ ಅದ
ರಿಂದ ಪ್ರಯೋಜನವಿಲ್ಲ. ನೀನು ಗುಣಹೊಂದು
ವುದಿಲ್ಲ.
12 ಬೇರೆ ಜನಾಂಗಗಳು ನೀನು ಗೋಳಾಡುವದನ್ನು
ಕೇಳಿಸಿಕೊಳ್ಳುವವು. ನಿನ್ನ ಗೋಳಾಟವು ಇಡೀ
ಭೂಮಂಡಲದಲ್ಲೆಲ್ಲ ಕೇಳಿಸುವುದು. 'ಒಬ್ಬ ಶೂರ
ಸೈನಿಕನು' ಮತ್ತೊಬ್ಬ 'ಶೂರ ಸೈನಿಕನನ್ನು'
ಎದುರಿಸುವನು. ಆ ಶೂರ ಸೈನಿಕರಿಬ್ಬರೂ ಒಟ್ಟಿಗೆ
ನೆಲಕ್ಕೆ ಬೀಳುವರು.''

13 ಪ್ರವಾದಿಯಾದ ಯೆರೆಮೀಯನಿಗೆ ಯೆಹೋವನು
ಕೊಟ್ಟ ಸಂದೇಶವಿದು. ಈ ಸಂದೇಶ ನೆಬೂಕದ್ನೆಚ್ಚರನು
ಈಜಿಪ್ಟಿನ ಮೇಲೆ ಧಾಳಿ ಮಾಡಲು ಬರುವದರ ಬಗ್ಗೆ ಇದೆ.

14 ''ಈಜಿಪ್ಟಿನಲ್ಲಿ ಈ ಸಂದೇಶವನ್ನು ಪ್ರಕಟಿಸು,
ಮಿಗ್ದೋಲ್ ನಗರದಲ್ಲಿ ಇದನ್ನು ಪ್ರಚುರಪಡಿಸು.
ನೋಫ್ ಮತ್ತು ತಹಪನೇಸ್‌ಗಳಲ್ಲಿ ಪ್ರಚುರ
ಪಡಿಸಿರಿ, 'ಯುದ್ಧಕ್ಕೆ ಸಿದ್ಧರಾಗಿರಿ, ಏಕೆಂದರೆ ನಿಮ್ಮ
ಸುತ್ತಲೂ ಜನರು ಖಡ್ಗಕ್ಕೆ ಆಹುತಿಯಾಗಿದ್ದಾರೆ.'
15 'ಈಜಿಪ್ಟೇ, ನಿಮ್ಮ ತರುಣ ಸೈನಿಕರು ಏಕೆ ಕೊಲ್ಲಲ್ಪ
ಡುವರು? ಅವರು ನಿಲ್ಲಲಾರರು. ಏಕೆಂದರೆ
ಯೆಹೋವನು ಅವರನ್ನು ನೆಲಕ್ಕೆ ತಳ್ಳುವನು.
16 ಆ ಸೈನಿಕರು ಮತ್ತೆಮತ್ತೆ ಎಡುವುವರು. ಅವರು
ಒಬ್ಬರ ಮೇಲೊಬ್ಬರು ಬೀಳುವರು. 'ಎದ್ದೇಳು,
ನಮ್ಮ ಜನರಲ್ಲಿಗೆ ನಾವು ಹೋಗೋಣ. ನಮ್ಮ
ಜನ್ಮಭೂಮಿಗೆ ನಾವು ಹೋಗೋಣ. ನಮ್ಮ
ವೈರಿಯು ನಮ್ಮನ್ನು ಸೋಲಿಸುತ್ತಿದ್ದಾನೆ. ನಾವು
ಇಲ್ಲಿಂದ ಹೊರಡಬೇಕು' ಎಂದು ಅವರು ಹೇಳಿ
ಕೊಳ್ಳುವರು.

17 'ಈಜಿಪ್ಟಿನ ರಾಜನಾದ ಫರೋಹನು ಕೇವಲ
ಒಂದು ಪೊಳ್ಳು ಧ್ವನಿ. ಅವನ ವೈಭವದ ದಿನಗಳು
ಮುಗಿ ದವು''' ಎಂದು ಆ ಸೈನಿಕರು ತಮ್ಮ
ಜನ್ಮಭೂಮಿ ಯಲ್ಲಿ ಹೇಳುವರು.
18 ಈ ಸಂದೇಶವು ರಾಜನಿಂದ ಬಂದದ್ದು. ಆ
ರಾಜನೇ ಸರ್ವಶಕ್ತನಾದ ಯೆಹೋವನು. ''ನನ್ನ
ಜೀವದಾಣೆಯಾಗಿ ಹೇಳುತ್ತೇನೆ. ಬಲಿಷ್ಠನಾದ
ನಾಯಕನು ಬರುವನು. ಅವನು ತಾಬೋರ್
ಬೆಟ್ಟದಂತೆಯೂ ಸಮುದ್ರದ ಸಮೀಪದ
ಕರ್ಮೆಲ್ ಗುಡ್ಡದಂತೆಯೂ ಇರುವನು.

19 ಈಜಿಪ್ಟಿನ ಜನಗಳೇ, ನಿಮ್ಮ ವಸ್ತುಗಳನ್ನು ಕಟ್ಟಿಕೊಂಡು ಸೆರೆವಾಸಕ್ಕೆ ಸಿದ್ಧರಾಗಿರಿ. ಏಕೆಂದರೆ ನೋಫ್ ಪಟ್ಟಣವು ಹಾಳುಬಿದ್ದ ನಿರ್ಜನವಾದ ಪ್ರದೇಶವಾಗುವುದು. ನಗರಗಳನ್ನು ನಾಶಪಡಿಸಲಾಗುವುದು; ಅವುಗಳು ನಿರ್ಜನವಾಗುವವು.

20 ''ಈಜಿಪ್ಟ ಒಂದು ಸುಂದರವಾದ ಹಸುವಿನಂತೆ, ಆದರೆ ಉತ್ತರದಿಂದ ತೊಣಚಿಯು* ಅದನ್ನು ಪೀಡಿಸಲು ಬರುತ್ತಲಿದೆ.

21 ಸಂಬಳಕ್ಕಾಗಿ ದುಡಿಯುವ ಈಜಿಪ್ಟಿನ ಸೈನಿಕರು ಕೊಬ್ಬಿದ ಕರುಗಳಂತಿದ್ದಾರೆ. ಅವರೆಲ್ಲರು ಹಿಂತಿರುಗಿ ಓಡಿಹೋಗುವರು. ಅವರು ಧೈರ್ಯದಿಂದ ಧಾಳಿಯನ್ನು ಎದುರಿಸಲಾರರು. ಅವರ ವಿನಾಶದ ಕಾಲ ಬರುತ್ತಿದೆ. ಬೇಗ ಅವರನ್ನು ದಂಡಿಸಲಾಗುವುದು.

22 ಈಜಿಪ್ಟ ಬುಸುಗುಟ್ಟಿ ತಪ್ಪಿಸಿಕೊಳ್ಳಲು ಪ್ರಯತ್ನ ಮಾಡುವ ಹಾವಿನಂತಿದೆ. ವೈರಿಗಳು ಬಹಳ ಹತ್ತಿರಕ್ಕೆ ಬಂದಿದ್ದಾರೆ. ಈಜಿಪ್ಟಿನ ಸೈನಿಕರು ಓಡಿಹೋಗಲು ಪ್ರಯತ್ನ ಮಾಡುತ್ತಿದ್ದಾರೆ. ವೈರಿಗಳು ಕೊಡಲಿಯನ್ನು ಹಿಡಿದುಕೊಂಡು ಈಜಿಪ್ಟಿನ ಮೇಲೆ ಬೀಳುವರು; ಅವರು ಮರಕಡಿಯುವ ಜನರಂತಿದ್ದಾರೆ.''

23 ಯೆಹೋವನು ಇಂತೆನ್ನುತ್ತಾನೆ. ''ವೈರಿಗಳು ಈಜಿಪ್ಟಿನ ಅರಣ್ಯವನ್ನು (ಸೈನ್ಯವನ್ನು) ಕತ್ತರಿಸುವರು. ಆ ಅರಣ್ಯದಲ್ಲಿ (ಸೈನ್ಯದಲ್ಲಿ) ಅನೇಕ ಮರಗಳಿವೆ (ಸೈನಿಕರಿದ್ದಾರೆ). ಆದರೂ ಅದನ್ನು ಕತ್ತರಿಸಲಾಗುವುದು. ಮಿಡತೆಗಳಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ವೈರಿಗಳ ಸೈನಿಕರಿದ್ದಾರೆ. ಆ ಸೈನಿಕರನ್ನು ಯಾರಿಂದಲೂ ಎಣಿಸಲಾಗದು.

24 ಈಜಿಪ್ಟಿಗೆ ಅವಮಾನವಾಗುವುದು. ಉತ್ತರದ ಶತ್ರು ಅವರನ್ನು ಸೋಲಿಸುವನು. ''

25 ಇಸ್ರೇಲರ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ಇಂತೆನ್ನುತ್ತಾನೆ: ''ಬಹುಬೇಗನೆ ನಾನು
ಥೀಬಸ್ಸಿನ ಆಮೋನ್ ದೇವತೆಯನ್ನು ದಂಡಿಸುವೆನು.
ನಾನು ಫರೋಹನನ್ನು, ಈಜಿಪ್ಟ್‌ನ್ನು ಮತ್ತು ಅವಳ
ದೇವರುಗಳನ್ನು ದಂಡಿಸುವೆನು. ನಾನು ಈಜಿಪ್ಟಿನ ರಾಜ
ರನ್ನು ದಂಡಿಸುವೆನು. ಫರೋಹನನ್ನು ನಂಬಿದವರನ್ನು
ದಂಡಿಸುವೆನು. 26 ಆ ಜನರನ್ನೆಲ್ಲ ಅವರ ಶತ್ರುಗಳು
ಸೋಲಿಸುವಂತೆ ಮಾಡುವೆನು. ಅವರ ಶತ್ರುಗಳು ಅವ
ರನ್ನು ಕೊಲ್ಲಬಯಸುವರು. ನಾನು ಆ ಜನರನ್ನು
ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನ ಮತ್ತು
ಅವನ ಸೇವಕರ ಕೈಗೆ ಒಪ್ಪಿಸುವೆನು.''

''ಬಹಳ ಹಿಂದೆ, ಈಜಿಪ್ಟ್ ದೇಶದಲ್ಲಿ ಶಾಂತಿ ನೆಲೆಸಿತ್ತು. ತೊಂದರೆಗಳ ಈ ದಿನಗಳ ತರುವಾಯ ಈಜಿಪ್ಟ್ ಪುನಃ ಶಾಂತಿಯ ಬೀಡಾಗುವುದು'' ಇದು ಯೆಹೋವನ ನುಡಿ.

### ಉತ್ತರ ಇಸ್ರೇಲಿಗೆ ಸಂದೇಶ

27 ''ನನ್ನ ಸೇವಕನಾದ ಯಾಕೋಬೇ, ಭಯಪಡಬೇಡ. ಇಸ್ರೇಲೇ, ಅಂಜಬೇಡ. ಆ ದೂರಸ್ಥಳಗಳಿಂದ ನಾನು ನಿನ್ನನ್ನು ಖಂಡಿತವಾಗಿ ರಕ್ಷಿಸುತ್ತೇನೆ. ಬಂಧಿಯಾಗಿರುವ ದೇಶಗಳಿಂದ ನಾನು ನಿನ್ನ ಮಕ್ಕಳನ್ನು ರಕ್ಷಿಸುತ್ತೇನೆ. ಯಾಕೋಬು ಪುನಃ ನೆಮ್ಮದಿಯಾಗಿಯೂ ಸುರಕ್ಷಿತವಾಗಿಯೂ ಇರುವುದು. ಯಾರೂ ಅದನ್ನು ಹೆದರಿಸಲಾರರು.''

28 ಯೆಹೋವನು ಇಂತೆನ್ನುತ್ತಾನೆ: ''ನನ್ನ ಸೇವಕನಾದ ಯಾಕೋಬೇ, ಭಯಪಡಬೇಡ. ನಾನು ನಿನ್ನ ಜೊತೆಯಲ್ಲಿದ್ದೇನೆ. ನಾನು ನಿನ್ನನ್ನು ವಿವಿಧ ಸ್ಥಳಗಳಿಗೆ ಅಟ್ಟಿದೆ. ನಾನು ಆ ಜನಾಂಗಗಳನ್ನೆಲ್ಲ ಸಂಪೂರ್ಣವಾಗಿ ನಾಶಮಾಡುತ್ತೇನೆ. ಆದರೆ ನಿನ್ನನ್ನು ನಾನು ಸಂಪೂರ್ಣವಾಗಿ ನಾಶಮಾಡುವದಿಲ್ಲ. ನೀನು ಮಾಡಿದ ದುಷ್ಕಾರ್ಯಗಳಿಗಾಗಿ ನಿನಗೆ ಶಿಕ್ಷೆ ಆಗಲೇ ಬೇಕು. ಆದುದರಿಂದ ನಾನು ನಿನಗೆ ದಂಡನೆಯಿಂದ ತಪ್ಪಿಸಿಕೊಳ್ಳಲು ಬಿಡುವದಿಲ್ಲ. ನಾನು ನಿನಗೆ ಸರಿಯಾಗಿ ಬುದ್ಧಿ ಕಲಿಸುತ್ತೇನೆ. ಆದರೆ ನ್ಯಾಯವಂತನಾಗಿರುವೆನು.''

### ಫಿಲಿಷ್ಟಿಯರ ಬಗ್ಗೆ ಸಂದೇಶ

47 ಪ್ರವಾದಿಯಾದ ಯೆರೆಮೀಯನಿಗೆ ಯೆಹೋವನಿಂದ ಈ ಸಂದೇಶ ಫಿಲಿಷ್ಟಿಯರ ಬಗ್ಗೆ ಬಂದಿತು. ಫರೋಹನು ಗಾಜಾ ಪಟ್ಟಣದ ಮೇಲೆ ಧಾಳಿ ಮಾಡುವ ಮುಂಚೆ ಈ ಸಂದೇಶ ಬಂದಿತು.

2 ಯೆಹೋವನು ಇಂತೆನ್ನುತ್ತಾನೆ: ''ನೋಡಿರಿ, ಉತ್ತರದಲ್ಲಿ ಶತ್ರು ಸೈನಿಕರು ಒಟ್ಟುಗೂಡುತ್ತಿದ್ದಾರೆ. ದಡಮೀರಿ ಭೋರ್ಗರೆಯುವ ನದಿಯಂತೆ ಅವರು ಬರುವರು. ಅವರು ಪ್ರವಾಹದಂತೆ ಇಡೀ ದೇಶವನ್ನು ವ್ಯಾಪಿಸುವರು. ಅವರು ಪಟ್ಟಣಗಳನ್ನೂ ಅಲ್ಲಿ ವಾಸಿಸುವ ಜನರನ್ನೂ ಮುತ್ತುವರು. ಆ ದೇಶಗಳಲ್ಲಿ ವಾಸಮಾಡುವ ಎಲ್ಲರೂ ಸಹಾಯಕ್ಕಾಗಿ ಗೋಳಿಡುವರು.

3 ''ಅವರು ಕುದುರೆಗಳ ಓಟದ ಸದ್ದನ್ನು ಕೇಳುವರು. ಅವರು ರಥಗಳ ಧ್ವನಿಯನ್ನು ಕೇಳುವರು. ಅವರಿಗೆ ಚಕ್ರಗಳ ಗಡಗಡಾಟ ಕೇಳಿಸುವುದು. ತಂದೆಗಳು

---

**ತೊಣಚಿ** ಹಸುಗಳ ಮತ್ತು ಎತ್ತುಗಳ ಸುತ್ತಲೂ ಹಾರುತ್ತಾ ಕಚ್ಚುವ ಚಿಟ್ಟೆ

ತಮ್ಮ ತಮ್ಮ ಮಕ್ಕಳಿಗೆ ಸುರಕ್ಷಣೆಯನ್ನು ಕೊಡ
ಲಾಗದಷ್ಟು ದುರ್ಬಲರಾಗಿರುವರು.

4 ‘‘ಎಲ್ಲಾ ಫಿಲಿಷ್ಟಿಯರ ವಿನಾಶದ ಕಾಲ ಬಂದಿದೆ.
ತೂರಿನ ಮತ್ತು ಚೀದೋನಿನ ಸಹಾಯಕರಲ್ಲಿ
ಅಳಿದುಳಿದವರನ್ನೆಲ್ಲ ನಾಶ ಮಾಡುವ ಕಾಲ
ಬಂದಿದೆ. ಯೆಹೋವನು ಬಹುಬೇಗ ಫಿಲಿಷ್ಟಿಯ
ರನ್ನು ನಾಶಮಾಡುವನು. ಕಫ್ತೋರ್ ದ್ವೀಪದ
ಅಳಿದುಳಿದ ಜನರನ್ನು ಅವನು ನಾಶಮಾಡುವನು.
5 ಗಾಜಾದ ಜನರು ದುಃಖಿತರಾಗಿ ತಮ್ಮ ತಲೆಗಳನ್ನು
ಬೋಳಿಸಿಕೊಳ್ಳುವರು. ಅಷ್ಕೆಲೋನಿನ ಜನರನ್ನು
ಸ್ತಬ್ಧಗೊಳಿಸಲಾಗುವುದು. ಕಣಿವೆ ಪ್ರದೇಶದಿಂದ
ಉಳಿದುಕೊಂಡವರೇ, ನಿಮ್ಮನ್ನು ಎಂದಿನವರೆಗೆ
ಕತ್ತರಿಸಿ ಕೊಳ್ಳುತ್ತಿರುವಿರಿ?
6 ‘‘ಯೆಹೋವನ ಖಡ್ಗವೇ, ನೀನಿನ್ನೂ ಹೋಗಲಿ
ಲ್ಲವೇ? ಎಷ್ಟು ಹೊತ್ತು ನೀನು ಹೋರಾಡುತ್ತಿ
ರುವೆ? ನಿನ್ನ ಒರೆಯಲ್ಲಿ ಹೋಗು, ಸುಮ್ಮನಿರು,
ಶಾಂತವಾಗಿರು.
7 ಆದರೆ ಯೆಹೋವನ ಖಡ್ಗವು ವಿಶ್ರಾಂತಿ ಪಡೆಯು
ವುದು ಹೇಗೆ ಸಾಧ್ಯ? ಯೆಹೋವನು ಅದಕ್ಕೆ
ಒಂದು ಆಜ್ಞೆಯನ್ನು ಕೊಟ್ಟಿದ್ದಾನೆ. ಅಷ್ಕೆಲೋನ್
ನಗರದ ಮೇಲೆ ಮತ್ತು ಕರಾವಳಿಯ ಮೇಲೆ ಧಾಳಿ
ಮಾಡಬೇಕೆಂದು ಯೆಹೋವನು ಅದಕ್ಕೆ ಆಜ್ಞೆ
ವಿಧಿಸಿದ್ದಾನೆ.’’

### ಮೋವಾಬಿನ ವಿಷಯವಾಗಿ ಸಂದೇಶ

48 ಈ ಸಂದೇಶವು ಮೋವಾಬ್ ದೇಶವನ್ನು
ಕುರಿತದ್ದು. ಇಸ್ರೇಲಿನ ದೇವರೂ ಸರ್ವಶಕ್ತನೂ
ಆಗಿರುವ ಯೆಹೋವನು ಹೀಗೆ ಹೇಳುತ್ತಾನೆ:

‘‘ನೆಬೋ ಪರ್ವತಕ್ಕೆ* ದುರ್ಗತಿ ಬರುವುದು.
ನೆಬೋ ಪರ್ವತ ಪ್ರದೇಶವು ಹಾಳಾಗುವುದು.
ಕಿರ್ಯಾತಯಿಮ್ ಪಟ್ಟಣವು ಸೋಲುವುದು.
ಅದನ್ನು ವಶಪಡಿಸಿಕೊಳ್ಳಲಾಗುವುದು. ಭದ್ರ
ವಾದ ಸ್ಥಳವನ್ನು ಸೋಲಿಸಿ ಧ್ವಂಸ ಮಾಡ
ಲಾಗುವುದು.
2 ಇನ್ನು ಮುಂದೆ ಮೋವಾಬ್ ಪಟ್ಟಣವು ಹೊಗಳಿ
ಕೆಗೆ ಪಾತ್ರವಾಗುವುದಿಲ್ಲ. ಹೆಷ್ಬೋನ್ ಪಟ್ಟಣದ
ಜನರು ಮೋವಾಬನ್ನು ಸೋಲಿಸುವ ಯುಕ್ತಿ
ಮಾಡುವರು. ಅವರು ಆ ಜನಾಂಗವನ್ನು ನಾಶ
ಮಾಡುವ ಆಲೋಚನೆ ಮಾಡುವರು. ಮದ್ಮೆನೆ
ಪಟ್ಟಣವೇ, ನೀನೂ ಸಹ ಸುಮ್ಮನಾಗುವೆ. ಖಡ್ಗವು
ನಿನ್ನನ್ನು ಬೆನ್ನಟ್ಟುವದು.
3 ಹೊರೊನಯಿಮಿನಿಂದ ಬರುವ ಗೋಳಾಟದ
ಧ್ವನಿಯನ್ನು ಕೇಳಿರಿ. ಅದು ವಿನಾಶದ ಮತ್ತು
ಗೊಂದಲದ ಧ್ವನಿ.
4 ಮೋವಾಬನ್ನು ನಾಶಮಾಡಲಾಗುವುದು. ಅವಳ
ಚಿಕ್ಕಮಕ್ಕಳು ಸಹಾಯಕ್ಕಾಗಿ ಗೋಳಿಡುವರು.
5 ಮೋವಾಬಿನ ಜನರು ಲೂಹೀತಿನ ದಾರಿಹಿಡಿದು
ಹೋಗುತ್ತಾರೆ. ಹೋಗುವಾಗ ಅವರು ಬಹಳ
ವಾಗಿ ಗೋಳಾಡುತ್ತಾರೆ. ಅವರ ಕಷ್ಟ ಮತ್ತು
ನೋವಿನ ಗೋಳಾಟವು ಆ ದಾರಿಯಿಂದ ಹೊರೊ
ನಯಿಮ್ ಪಟ್ಟಣದವರೆಗೂ ಕೇಳಿಬರುತ್ತದೆ.
6 ಓಡಿಹೋಗಿರಿ, ನಿಮ್ಮ ಪ್ರಾಣಗಳನ್ನು ಉಳಿಸಿ
ಕೊಳ್ಳುವದಕ್ಕಾಗಿ ಓಡಿಹೋಗಿರಿ. ಮರುಭೂಮಿ
ಯಲ್ಲಿರುವ ಕಾಡುಕತ್ತೆಯಂತೆ ಓಡಿರಿ.
7 ‘‘ನೀವು ನಿರ್ಮಿಸಿದ ವಸ್ತುಗಳಲ್ಲಿ ಮತ್ತು ನಿಮ್ಮ
ಸಂಪತ್ತಿನಲ್ಲಿ ನಂಬಿಕೆಯಿಟ್ಟಿದ್ದರಿಂದ ನಿಮ್ಮನ್ನು
ವಶಪಡಿಸಿಕೊಳ್ಳಲಾಗುವುದು. ಕೆಮೋಷ್ ದೇವತೆ
ಯನ್ನು ಅದರ ಯಾಜಕರೊಂದಿಗೆ ಮತ್ತು ಪ್ರಧಾನ
ರೊಂದಿಗೆ ಸೆರೆಹಿಡಿಯಲಾಗುವುದು.
8 ಪ್ರತಿಯೊಂದು ಪಟ್ಟಣದ ಮೇಲೆ ವಿನಾಶಕನು
ದಾಳಿ ಮಾಡುವನು. ಒಂದು ಪಟ್ಟಣವೂ ತಪ್ಪಿಸಿ
ಕೊಳ್ಳಲಾರದು. ಇಳಿಜಾರು ಪ್ರದೇಶವನ್ನು ನಾಶ
ಪಡಿಸಲಾಗುವುದು. ಎತ್ತರದಲ್ಲಿದ್ದ ಪ್ರದೇಶವನ್ನು
ಹಾಳುಮಾಡಲಾಗುವುದು. ಇದನ್ನು ಯೆಹೋ
ವನೇ ಹೇಳಿರುವುದರಿಂದ ನೆರವೇರುವುದು.
9 ಮೋವಾಬಿನ ಭೂಮಿಯ ಮೇಲೆ ಉಪ್ಪನ್ನು
ಹರಡಿರಿ. ದೇಶವು ಬರಿದಾದ ಮರುಭೂಮಿ
ಯಾಗುವುದು. ಮೋವಾಬಿನ ಪಟ್ಟಣಗಳು ಬರಿ
ದಾಗುವವು. ಅಲ್ಲಿ ಯಾರೂ ವಾಸಮಾಡಲಾರರು.
10 ಯೆಹೋವನು ಹೇಳಿದಂತೆ ನಡೆಯದಿದ್ದವನಿಗೆ
ಮತ್ತು ಆ ಜನರನ್ನು ಕೊಲ್ಲಲು ತನ್ನ ಖಡ್ಗವನ್ನು
ಬಳಸದಿದ್ದವನಿಗೆ ಕೇಡಾಗುವುದು.
11 ‘‘ಮೋವಾಬಿಗೆ ಕಷ್ಟವೆಂಬುದೇ ಗೊತ್ತಿಲ್ಲ.
ಮೋವಾಬ್ ಮಡ್ಡಿತಂಗಿಸಲು ಬಿಟ್ಟ ದ್ರಾಕ್ಷಾರಸ
ದಂತಿದೆ. ಅದನ್ನು ಒಂದು ಪಾತ್ರೆಯಿಂದ
ಮತ್ತೊಂದು ಪಾತ್ರೆಗೆ ಒಮ್ಮೆಯೂ ಸುರಿದಿಲ್ಲ.
ಅದನ್ನು ಒಮ್ಮೆಯೂ ಸೆರೆಹಿಡಿದಿಲ್ಲ. ಆದುದರಿಂದ
ಅದರ ರುಚಿ ಮೊದಲಿದ್ದ ಹಾಗೆ ಇದೆ. ಅದರ
ವಾಸನೆಯಲ್ಲಿ ಬದಲಾವಣೆಯಾಗಿಲ್ಲ.’’
12 ‘‘ಯೆಹೋವನು ಹೀಗೆಂದನು: ‘‘ನಿನ್ನನ್ನು ನಿನ್ನ
ಪಾತ್ರೆಯಿಂದ ಸುರಿಯುವದಕ್ಕೆ ನಾನು ಜನರನ್ನು

---

**ನೆಬೋ ಪರ್ವತ** ಮೋವಾಬಿನಲ್ಲಿದ್ದ ಒಂದು ಪರ್ವತ.

ಕಳುಹಿಸುತ್ತೇನೆ. ಆ ಜನರು ಮೋವಾಬಿನ ಪಾತ್ರೆ
ಗಳನ್ನು ಬರಿದಾಗಿಸುವರು. ಅನಂತರ ಆ ಪಾತ್ರೆ
ಗಳನ್ನು ಒಡೆದು ಚೂರುಚೂರು ಮಾಡುವರು.''

13 ಆಗ ಮೋವಾಬಿನ ಜನರು ತಮ್ಮ ಸುಳ್ಳುದೇವರಾದ
ಕೆಮೋಷಿಗಾಗಿ ನಾಚಿಕೆಪಡುವರು. ಇಸ್ರೇಲಿನ ಜನರು
ಬೇತೇಲಿನಲ್ಲಿ ಆ ಸುಳ್ಳುದೇವರನ್ನು ನಂಬಿಕೊಂಡಿದ್ದರು.
ಆದರೆ ಆ ಸುಳ್ಳುದೇವರು ಅವರ ಸಹಾಯಕ್ಕೆ ಬಾರದೆ
ಇದ್ದಾಗ ಆ ಇಸ್ರೇಲರು ನಾಚಿಕೆಗೆ ಈಡಾದರು.
ಮೋವಾಬ್ ಸಹ ಅದೇ ಸ್ಥಿತಿಯಲ್ಲಿರುವುದು.

14 '''ನಾವು ಒಳ್ಳೆಯ ಯೋಧರಾಗಿದ್ದೇವೆ. ನಾವು
ಯುದ್ಧ ವೀರರಾಗಿದ್ದೇವೆ.'' ಎಂದು ನೀವು ಹೇಳ
ಲಾರಿರಿ.'

15 ''ವೈರಿಯು ಮೋವಾಬಿನ ಮೇಲೆ ದಾಳಿ ಮಾಡು
ವನು. ವೈರಿಯು ಆ ಪಟ್ಟಣಗಳಲ್ಲಿ ಪ್ರವೇಶಮಾಡಿ
ಅವುಗಳ ಧ್ವಂಸ ಮಾಡುವನು. ಅವಳ ಅತ್ಯುತ್ತಮ
ತರುಣರು ಕೊಲೆಗೀಡಾಗುವರು.'' ಈ ಸಂದೇ
ಶವು ರಾಜನಿಂದ ಬಂದಿದೆ. ಆ ರಾಜನ ಹೆಸರು
ಸರ್ವಶಕ್ತನಾದ ಯೆಹೋವನು ಎಂದು.

16 ''ಮೋವಾಬಿನ ಅಂತ್ಯ ಸಮೀಪಿಸುತ್ತಿದೆ. ಬೇಗನೆ
ಮೋವಾಬನ್ನು ಧ್ವಂಸಗೊಳಿಸಲಾಗುವುದು.

17 ಮೋವಾಬಿನ ಸುತ್ತಮುತ್ತಲೂ ವಾಸಿಸುವ ನೀವೆ
ಲ್ಲರು ಆ ದೇಶಕ್ಕಾಗಿ ಗೋಳಾಡಬೇಕು.
ಮೋವಾಬ್ ಎಷ್ಟು ಸುಪ್ರಸಿದ್ಧವಾಗಿದೆ ಎಂಬುದು
ನಿಮಗೆಲ್ಲ ಗೊತ್ತು. ಆದುದರಿಂದ ಅದಕ್ಕಾಗಿ
ಗೋಳಾಡಿರಿ. 'ರಾಜನ ಶಕ್ತಿಯು ಇಲ್ಲವಾಯಿತು.
ಮೋವಾಬಿನ ಸಾಮರ್ಥ್ಯ ಮತ್ತು ಘನತೆ
ಕಣ್ಮರೆಯಾದವು' ಎಂದು ಹೇಳಿರಿ.

18 ''ದೀಬೋನ್‌ನಲ್ಲಿ ವಾಸಿಸುವ ಜನರೇ, ನಿಮ್ಮ
ಗೌರವಾನ್ವಿತ ಸ್ಥಳದಿಂದ ಕೆಳಗಿಳಿದು ಬನ್ನಿ. ನೆಲದ
ಮೇಲೆ ಧೂಳಿನಲ್ಲಿ ಕುಳಿತುಕೊಳ್ಳಿ. ಏಕೆಂದರೆ,
ಧ್ವಂಸಕನು ಬರುತ್ತಿದ್ದಾನೆ. ನಿಮ್ಮ ಭದ್ರವಾದ ನಗರ
ಗಳನ್ನು ಅವನು ಹಾಳುಮಾಡುತ್ತಾನೆ.

19 ''ಅರೋಯೇರಿನವರೇ, ದಾರಿಯ ಮಗ್ಗುಲಲ್ಲಿ
ನಿಂತುಕೊಂಡು ನೋಡಿರಿ. ಆ ಗಂಡಸು ಓಡಿ
ಹೋಗುವದನ್ನು ನೋಡಿರಿ. ಆ ಹೆಂಗಸು ಓಡಿ
ಹೋಗುವದನ್ನು ನೋಡಿರಿ. ಏನಾಯಿತೆಂದು
ಅವರನ್ನು ಕೇಳಿರಿ.

20 ''ಮೋವಾಬು ಹಾಳಾಗುವುದು. ಅದು ನಾಚಿಕೆ
ಪಡುವುದು. ಮೋವಾಬು ಸತತವಾಗಿ ಗೋಳಾ
ಡುವುದು. ಮೋವಾಬು ಹಾಳಾಯಿತೆಂದು
ಅರ್ನೋನ್ ನದಿಯ ತೀರದಲ್ಲಿ ಸಾರಿರಿ.

21 ಎತ್ತರದ ಪ್ರದೇಶದಲ್ಲಿರುವ ಜನರನ್ನು ಶಿಕ್ಷಿಸ
ಲಾಗಿದೆ. ಹೋಲೋನ್, ಯಾಚಾ ಮತ್ತು
ಮೆಫಾತ್ ಪಟ್ಟಣಗಳಿಗೆ,

22 ದೂರದಲ್ಲಿರುವ ಮೋವಾಬಿನ ಎಲ್ಲಾ ಊರು
ಗಳಿಗೆ ಅಂದರೆ ದೀಬೋನ್, ನೆಬೋ,
ಬೇತ್‌ದಿಬ್ಲಾತಯೀಮ್,

23 ಕಿರ್ಯಾತಯೀಮ್, ಬೇತ್‌ಗಾಮೂಲ್,
ಬೇತ್‌ಮೆಯೋನ್,

24 ಕೆರೀಯೋತ್. ಬೊಚ್ರ ಮೊದಲಾದ ಮೋವಾ
ಬಿನ ದೂರದ ಹತ್ತಿರದ ಎಲ್ಲಾ ಪಟ್ಟಣಗಳಿಗೆ
ದಂಡನೆಯಾಗದೆ ಇಲ್ಲ.

25 ಮೋವಾಬಿನ ಬಲವನ್ನು ಕತ್ತರಿಸಲಾಗಿದೆ.
ಮೋವಾಬಿನ ತೋಳನ್ನು ಮುರಿಯಲಾಗಿದೆ''
ಇದು ಯೆಹೋವನ ನುಡಿ.

26 ತಾನು ಯೆಹೋವನಿಗಿಂತ ಬಹಳ ಮುಖ್ಯವಾದವ
ನೆಂದು ಮೋವಾಬು ಭಾವಿಸಿತ್ತು. ಕುಡಿದು ಮದ
ವೇರಿದವನಂತೆ ಆಗುವವರೆಗೆ ಮೋವಾಬನ್ನು
ದಂಡಿಸಿರಿ. ಮೋವಾಬು ತನ್ನ ವಾಂತಿಯಲ್ಲಿ ಬಿದ್ದು
ಹೊರಳಾಡುವದು. ಜನರು ಮೋವಾಬನ್ನು
ತಮಾಷೆ ಮಾಡುವರು.

27 ''ಮೋವಾಬೇ, ನೀನು ಇಸ್ರೇಲಿನ ಬಗ್ಗೆ ತಮಾಷೆ
ಮಾಡಿದೆ. ಇಸ್ರೇಲ್ ಒಂದು ಕಳ್ಳರ ಗುಂಪಿನಿಂದ
ಹಿಡಿಯಲ್ಪಟ್ಟಿತ್ತು. ಇಸ್ರೇಲಿನ ಬಗ್ಗೆ ಮಾತನಾಡಿ
ದಾಗಲೆಲ್ಲ ನೀನು ತಲೆಯಾಡಿಸಿದೆ. ಇಸ್ರೇಲಿಗಿಂತ
ಉತ್ತಮನೋ ಎಂಬಂತೆ ನಟಿಸಿದೆ.

28 ಮೋವಾಬ್ಯರೇ, ನಿಮ್ಮ ಪಟ್ಟಣಗಳನ್ನು ಬಿಟ್ಟುಬಿಡಿ.
ಹೋಗಿ, ಬೆಟ್ಟಗಳಲ್ಲಿ ವಾಸಿಸಿರಿ. ಗುಹೆಯ ಬಾಗಿಲಿ
ನಲ್ಲಿ ತನ್ನ ಗೂಡನ್ನು ಕಟ್ಟಿಕೊಳ್ಳುವ ಪಾರಿವಾಳ
ದಂತೆ ಆಗಿರಿ.''

29 ''ಮೋವಾಬಿನ ಸೊಕ್ಕಿನ ಬಗ್ಗೆ ನಾವು ಕೇಳಿದ್ದೇವೆ.
ಅವ ನಿಗೆ ತುಂಬ ಸೊಕ್ಕು ಬಂದಿತ್ತು. ತಾನೇ ಮುಖ್ಯ
ವಾದವನೆಂದು ಅವನು ಭಾವಿಸಿದ್ದನು. ಅವನು
ಯಾವಾಗಲೂ ಬಡಾಯಿಕೊಚ್ಚಿಕೊಳ್ಳುತ್ತಿದ್ದನು.
ಅವನು ತುಂಬಾ ಸೊಕ್ಕಿನವನಾಗಿದ್ದನು.''

30 ಯೆಹೋವನು ಹೀಗೆಂದನು: ''ಬಹುಬೇಗ
ಮೋವಾಬಿಗೆ ಕೋಪ ಬರುತ್ತದೆ. ಅವನು ಬಡಾ
ಯಿಕೊಚ್ಚಿಕೊಳ್ಳುತ್ತಾನೆಂಬುದು ನನಗೆ ಗೊತ್ತು.
ಆದರೆ ಅವನ ಬಡಾಯಿಗಳೆಲ್ಲ ಸುಳ್ಳು. ತಾನು ಹೇಳಿ
ದಂತೆ ಮಾಡಲು ಅವನಿಂದಾಗದು.

31 ಆದುದರಿಂದ ನಾನು ಮೋವಾಬಿಗಾಗಿ ಗೋಳಾ
ಡುವೆನು; ಮೋವಾಬಿನ ಪ್ರತಿಯೊಬ್ಬರಿಗಾಗಿ
ಗೋಳಾಡುವೆನು. ನಾನು ಕೀರ್ ಹೆರೆಸಿನವರಿ
ಗಾಗಿ ಪ್ರಲಾಪಿಸುವೆನು.

32 ‘‘ನಾನು ಯೆಜ್ಜೇರಿನ ಜನರೊಂದಿಗೆ ಯೆಜ್ಜೇರಿಗಾಗಿ
ಪ್ರಲಾಪಿಸುವೆನು. ಸಿಬ್ಮವೇ, ನಿನ್ನ ದ್ರಾಕ್ಷಿಬಳ್ಳಿಗಳು
ಸಮುದ್ರದವರೆಗೂ ಹಬ್ಬಿದ್ದವು; ಅವು ಯೆಜ್ಜೇರ್
ಪಟ್ಟಣದವರೆಗೂ ಚಾಚಿದ್ದವು. ಆದರೆ ವಿನಾಶಕನು
ನಿನ್ನ ಹಣ್ಣುಗಳನ್ನು ಮತ್ತು ದ್ರಾಕ್ಷಿಗಳನ್ನು ಕಿತ್ತು
ಕೊಂಡಿದ್ದಾನೆ.
33 ಮೋವಾಬಿನ ದೊಡ್ಡದೊಡ್ಡ ದ್ರಾಕ್ಷಾತೋಟಗ
ಳಿಂದ ಹರ್ಷವೂ ಆನಂದವೂ ಕಣ್ಮರೆಯಾಗಿವೆ.
ದ್ರಾಕ್ಷಿಗಾಣದಿಂದ ದ್ರಾಕ್ಷಾರಸ ಹರಿಯುವದನ್ನು
ನಾನು ನಿಲ್ಲಿಸಿದ್ದೇನೆ. ದ್ರಾಕ್ಷಾರಸವನ್ನು ಮಾಡಲು
ದ್ರಾಕ್ಷಿಯನ್ನು ತುಳಿಯುವ ಜನರ ಹಾಡು ಮತ್ತು
ನೃತ್ಯ ಕಂಡುಬರುವದಿಲ್ಲ. ಸಂತೋಷದ ಧ್ವನಿ ಕೇಳಿ
ಬರುತ್ತಿಲ್ಲ.

34‘‘ಹೆಷ್ಬೋನ್ ಮತ್ತು ಎಲೆಯಾಲೆ ಎಂಬ ಪಟ್ಟಣಗಳ
ಜನರು ಅರಚಿಕೊಳ್ಳುತ್ತಿದ್ದಾರೆ. ಅವರ ಕಿರಿಚಾಟವು
ದೂರದ ಯಹಚಿನವರೆಗೂ ಕೇಳಿಬರುತ್ತಿದೆ. ಅವರ
ಕಿರಿಚಾಟವು ಚೋಯರಿನಿಂದ ದೂರದ ಹೊರೊನ
ಯಿಮ್ ಮತ್ತು ಎಗ್ಲತ್ ಶೆಲೆಶೀಯದವರೆಗೆ ಕೇಳಿ
ಬರುತ್ತದೆ. ನಿಮ್ರೀಮ್ ಹಳ್ಳದ ನೀರು ಸಹ ಬತ್ತಿ
ಹೋಗಿದೆ. 35ಮೋವಾಬಿನ ಜನರು ಪೂಜಾಸ್ಥಾನದಲ್ಲಿ
ಧೂಪ ಹಾಕುವದನ್ನು ನಾನು ನಿಲ್ಲಿಸುತ್ತೇನೆ. ಅವರು ತಮ್ಮ
ದೇವರುಗಳಿಗೆ ಬಲಿ ಅರ್ಪಿಸುವದನ್ನು ನಿಲ್ಲಿಸುತ್ತೇನೆ’’
ಎಂದು ಯೆಹೋವನು ನುಡಿದನು.
36‘‘ಮೋವಾಬಿಗಾಗಿ ನಾನು ಬಹಳ ದುಃಖಿತನಾಗಿ
ದ್ದೇನೆ. ಸ್ಮಶಾನಯಾತ್ರೆಯ ಕಾಲದಲ್ಲಿ ಊದುವ ಕೊಳಲಿ
ನಿಂದ ಹೊರಬರುವ ದುಃಖದ ಧ್ವನಿಯಂತೆ ನನ್ನ ಹೃದಯ
ಅಳುತ್ತಿದೆ. ಕೀರ್ ಹೆರೆಸಿನ ಜನರಿಗಾಗಿ ನಾನು ದುಃಖಿಸು
ತ್ತೇನೆ. ಅವರ ಹಣವನ್ನು ಮತ್ತು ಸಂಪತ್ತನ್ನು ಕಿತ್ತುಕೊಳ್ಳ
ಲಾಗಿದೆ. 37ಪ್ರತಿಯೊಬ್ಬರ ತಲೆಯನ್ನು ಬೋಳಿಸಲಾಗಿದೆ.
ಪ್ರತಿಯೊಬ್ಬರ ಗಡ್ಡವನ್ನು ಕತ್ತರಿಸಲಾಗಿದೆ. ಪ್ರತಿಯೊಬ್ಬರ
ಕೈಗಳು ಕತ್ತರಿಸಲ್ಪಟ್ಟು ಅವುಗಳಿಂದ ರಕ್ತ ಸುರಿಯುತ್ತಿದೆ.
ಪ್ರತಿಯೊಬ್ಬರು ತಮ್ಮ ಸೊಂಟಕ್ಕೆ ದುಃಖಸೂಚಕ
ವಸ್ತ್ರಗಳನ್ನು ಸುತ್ತಿಕೊಂಡಿದ್ದಾರೆ. 38ಮೋವಾಬಿನ ಪ್ರತಿ
ಯೊಂದು ಮಾಳಿಗೆಯ ಮೇಲೂ ಸಾರ್ವಜನಿಕ
ಚೌಕಗಳಲ್ಲಿಯೂ ಜನ ಸತ್ತವರಿಗಾಗಿ ಶೋಕಿಸುತ್ತಿದ್ದಾರೆ.
ಮೋವಾಬನ್ನು ನಾನು ಬರಿದಾದ ಪಾತ್ರೆಯಂತೆ ಮಾಡಿರು
ವುದರಿಂದ ದುಃಖ ವ್ಯಾಪಿಸಿದೆ.’’ ಇದು ಯೆಹೋವನ
ನುಡಿ. 39‘‘ಮೋವಾಬ್ ನುಚ್ಚುನೂರಾಯಿತು. ಜನರು
ಕಿರುಚುತ್ತಿದ್ದಾರೆ. ಮೋವಾಬ್ ಶರಣಾಗತವಾಯಿತು.
ಮೋವಾಬ್ ಈಗ ನಾಚಿಕೆಪಡುತ್ತಿದೆ. ಜನರು ಮೋವಾ
ಬನ್ನು ತಮಾಷೆ ಮಾಡುತ್ತಾರೆ. ಆದರೆ ಇಲ್ಲಿ ನಡೆದ
ಘಟನೆಗಳು ಅವರನ್ನು ಭೀತರನ್ನಾಗಿ ಮಾಡಿವೆ.’’

40 ಯೆಹೋವನು ಇಂತೆನ್ನುತ್ತಾನೆ: ‘‘ನೋಡಿ ಒಂದು
ರಣಹದ್ದು ಆಕಾಶದಿಂದ ಎರಗುತ್ತಿದೆ. ಅದು
ಮೋವಾಬಿನ ಮೇಲೆ ತನ್ನ ರೆಕ್ಕೆಗಳನ್ನು
ಪಸರಿಸುತ್ತಿದೆ.
41 ಮೋವಾಬಿನ ಪಟ್ಟಣಗಳನ್ನು ಗೆದ್ದುಕೊಳ್ಳಲಾಗು
ವುದು. ಅಡಗಿಕೊಳ್ಳುವ ಭದ್ರವಾದ ನೆಲೆಗಳನ್ನು
ವಶಪಡಿಸಿಕೊಳ್ಳಲಾಗುವುದು. ಆಗ ಮೋವಾಬಿನ
ಸೈನಿಕರು ಪ್ರಸವ ವೇದನೆಪಡುವ ಹೆಂಗಸಿನಂತೆ
ಗಾಬರಿಯಾಗುವರು.
42 ಮೋವಾಬ್ ಜನಾಂಗವನ್ನು ನಾಶಮಾಡಲಾಗು
ವದು. ಏಕೆಂದರೆ ತಾವು ಯೆಹೋವನಿಗಿಂತ ಬಹಳ
ಮುಖ್ಯವಾದವರೆಂದು ಅವರು ಭಾವಿಸಿ
ಕೊಂಡರು.’’
43 ಯೆಹೋವನು ಹೀಗೆ ಹೇಳಿದನು: ‘‘ಮೋವಾಬಿನ
ಜನರೇ, ಭಯವೂ ಆಳವಾದ ಗುಂಡಿಗಳೂ
ಬಲೆಗಳೂ ನಿಮಗಾಗಿ ಕಾದುಕೊಂಡಿವೆ.
44 ಜನರು ಅಂಜಿ ಓಡಿಹೋಗುವರು; ಆಳವಾದ
ಗುಂಡಿಗಳಲ್ಲಿ ಬೀಳುವರು. ಯಾರಾದರೂ ಆ ಆಳ
ವಾದ ಗುಂಡಿಗಳಿಂದ ಮೇಲಕ್ಕೆ ಹತ್ತಿ ಬಂದರೆ ಅವ
ರನ್ನು ಬಲೆಯಲ್ಲಿ ಹಿಡಿಯಲಾಗುವುದು. ನಾನು
ಮೋವಾಬಿಗೆ ದಂಡನೆಯ ವರ್ಷವನ್ನು ತರು
ವೆನು’’ ಎಂದು ಯೆಹೋವನು ನುಡಿದನು.

45 ‘‘ಜನರು ಪ್ರಬಲನಾದ ವೈರಿಯಿಂದ ತಪ್ಪಿಸಿಕೊಂಡು
ತಮ್ಮ ರಕ್ಷಣೆಗಾಗಿ ಹೆಷ್ಬೋನ್ ಪಟ್ಟಣಕ್ಕೆ ಓಡಿ
ಹೋದರು. ಆದರೆ ಅಲ್ಲಿ ರಕ್ಷಣೆಯಿರಲಿಲ್ಲ.
ಹೆಷ್ಬೋನಿನಲ್ಲಿ ಒಂದು ಅಗ್ನಿಜ್ವಾಲೆ ಪ್ರಾರಂಭ
ವಾಯಿತು. ಸೀಹೋನಿನಲ್ಲಿ ಅಗ್ನಿಜ್ವಾಲೆ ಪ್ರಾರಂಭ
ವಾಯಿತು. ಅದು ಮೋವಾಬಿನ ನಾಯಕರು
ಗಳನ್ನು ಸುಡುತ್ತಿದೆ. ಅದು ಆ ಗರ್ವಿಷ್ಠರನ್ನು
ಸುಡುತ್ತಿದೆ.
46 ಮೋವಾಬ್ಯರೇ, ನಿಮಗೆ ಕೇಡು ಕಾದಿದೆ.
ಕೆಮೋಷಿನ ಭಕ್ತರು ನಾಶವಾಗುತ್ತಿದ್ದಾರೆ. ನಿಮ್ಮ
ಮಕ್ಕಳನ್ನು ಬಂಧಿಗಳನ್ನಾಗಿಯೂ ಸೆರೆಯಾಳುಗಳ
ನ್ನಾಗಿಯೂ ತೆಗೆದುಕೊಂಡು ಹೋಗಲಾಗುತ್ತಿದೆ.

47‘‘ಮೋವಾಬಿನ ಜನರನ್ನು ಸೆರೆಹಿಡಿದುಕೊಂಡು ಹೋಗಲಾಗುವುದು. ಆದರೆ ಭವಿಷ್ಯದಲ್ಲಿ ನಾನು ಮೋವಾಬ್ಯರನ್ನು ಪುನಃ ಕರೆದುತರುವೆನು’’ ಇದು ಯೆಹೋವನಿಂದ ಬಂದ ಸಂದೇಶ.

ಮೋವಾಬಿನ ಕುರಿತಾದ ನ್ಯಾಯತೀರ್ಪು ಇದೇ

## ಅಮ್ಮೋನಿನ ಬಗ್ಗೆ ಸಂದೇಶ

49 ಈ ಸಂದೇಶ ಅಮ್ಮೋನ್ಯರನ್ನು ಕುರಿತದ್ದು.
ಯೆಹೋವನು ಹೀಗೆ ಹೇಳಿದನು: ‘‘ಅಮ್ಮೋ
ನ್ಯರೇ, ಇಸ್ರೇಲಿನ ಜನರಿಗೆ ಮಕ್ಕಳಿಲ್ಲವೆಂದು ನೀವು ತಿಳಿದುಕೊಂಡಿರುವಿರೇನು? ತಂದೆತಾಯಿ ಗಳು ಸತ್ತಮೇಲೆ ಭೂಮಿಯನ್ನು ತೆಗೆದುಕೊಳ್ಳುವ ದಕ್ಕೆ ಅವರ ವಾರಸುದಾರರು ಇಲ್ಲವೆಂದು ನೀವು ತಿಳಿದುಕೊಂಡಿರುವಿರೇನು? ಅದಕ್ಕಾಗಿಯೇ ಮಲ್ಕಾಮ್* ದೇವತೆಯು ಗಾದನ* ಸೀಮೆ ಯನ್ನು ಸ್ವಾಧೀನ ಮಾಡಿಕೊಂಡಳೇ?’’

2 ಯೆಹೋವನು ಇಂತೆನ್ನುತ್ತಾನೆ: ‘‘ಅಮ್ಮೋನಿನ ರಬ್ಬಾ* ನಿವಾಸಿಗಳು ಯುದ್ಧದ ಧ್ವನಿಗಳನ್ನು ಕೇಳುವ ಕಾಲ ಬರಲಿದೆ. ಅಮ್ಮೋನಿನ ರಬ್ಬಾ ನಾಶ ವಾಗಿ ಹಾಳಾದ ಕಟ್ಟಡಗಳ ಗುಡ್ಡವಾಗುವುದು. ಅದರ ಸುತ್ತಮುತ್ತಲಿನ ಪಟ್ಟಣಗಳನ್ನು ಸುಟ್ಟು ಹಾಕಲಾಗುವುದು. ಆ ಜನರು ಇಸ್ರೇಲರಿಗೆ ಆ ಪ್ರದೇಶವನ್ನು ಬಿಟ್ಟುಹೋಗುವಂತೆ ಒತ್ತಾಯಿಸಿ ದರು. ಆದರೆ ಇಸ್ರೇಲರು ಆ ಪ್ರದೇಶವನ್ನು ಬಿಟ್ಟು ಹೋಗುವಂತೆ ಅವರನ್ನು ಒತ್ತಾಯಿಸುವರು.’’ ಯೆಹೋವನು ಇಂತೆನ್ನುತ್ತಾನೆ:

3 ‘‘ಹೆಷ್ಬೋನಿನ ಜನರೇ, ಗೋಳಾಡಿರಿ; ಏಕೆಂದರೆ ಆಯಿ ಎಂಬ ಪಟ್ಟಣ ನಾಶವಾಯಿತು. ರಬ್ಬಾದ ಸ್ತ್ರೀಯರೇ, ಅಮ್ಮೋನಿನ ಸ್ತ್ರೀಯರೇ, ಗೋಳಾ ಡಿರಿ. ದುಃಖಸೂಚಕ ವಸ್ತ್ರಗಳನ್ನು ಧರಿಸಿಕೊಂಡು ಗೋಳಾಡಿರಿ. ರಕ್ಷಣೆಗಾಗಿ ನಗರಕ್ಕೆ ಓಡಿ ಹೋಗಿರಿ. ಏಕೆಂದರೆ ನಿಮ್ಮ ಶತ್ರುಗಳು ಬರುತ್ತಿ ದ್ದಾರೆ. ಅವರು ಮಲ್ಕಾಮ್ ದೇವತೆಯನ್ನು ತೆಗೆದು ಕೊಂಡು ಹೋಗುತ್ತಾರೆ. ಶತ್ರುಗಳು ಮಲ್ಕಾಮ್ ದೇವತೆಯ ಯಾಜಕರನ್ನೂ ಪ್ರಧಾನರನ್ನೂ ತೆಗೆದುಕೊಂಡು ಹೋಗುವರು.

4 ನೀನು ನಿನ್ನ ಬಲದ ಬಗ್ಗೆ ಜಂಭ ಕೊಚ್ಚಿಕೊಳ್ಳು ತ್ತಿರುವೆ, ಆದರೆ ನೀನು ನಿನ್ನ ಬಲವನ್ನು ಕಳೆದು ಕೊಳ್ಳುತ್ತಿರುವೆ. ನಿನ್ನ ಹಣ ನಿನ್ನನ್ನು ರಕ್ಷಿಸುವ ದೆಂದು ನೀನು ನಂಬಿರುವೆ. ಯಾರೊಬ್ಬರೂ ನಿನ್ನ ಮೇಲೆ ಧಾಳಿಮಾಡುವ ವಿಚಾರ ಸಹ ಇಟ್ಟು ಕೊಂಡಿಲ್ಲವೆಂದು ನೀನು ತಿಳಿದುಕೊಂಡಿರುವೆ.’’

5 ಆದರೆ ಸರ್ವಶಕ್ತನಾದ ಯೆಹೋವನು ಹೀಗೆನ್ನು ವನು, ‘‘ನಾನು ಎಲ್ಲೆಡೆಗಳಿಂದಲೂ ನಿಮಗೆ ಆಪತ್ತುಗಳನ್ನು ತರುವೆನು. ನೀವೆಲ್ಲರೂ ಓಡಿ ಹೋಗುವಿರಿ. ಯಾರೂ ನಿಮ್ಮನ್ನು ಪುನಃ ಒಂದಡೆ ಸೇರಿಸಲಾರರು.’’

6‘‘ಅಮ್ಮೋನ್ಯರನ್ನು ಸೆರೆಯಾಳುಗಳನ್ನಾಗಿ ಕೊಂಡೊ
ಯ್ಯಲಾಗುವುದು. ಆದರೆ ಅಮ್ಮೋನ್ಯರನ್ನು ನಾನು ಪುನಃ ಹಿಂದಕ್ಕೆ ಕರೆತರುವ ಕಾಲ ಬರುವದು’’ ಇದು ಯೆಹೋವನ ನುಡಿ.

## ಎದೋಮಿನ ಬಗ್ಗೆ ಸಂದೇಶ

7ಈ ಸಂದೇಶ ಎದೋಮನ್ನು ಕುರಿತದ್ದು. ಸರ್ವಶಕ್ತ
ನಾದ ಯೆಹೋವನು ಹೀಗೆನ್ನುತ್ತಾನೆ:

‘‘ತೇಮಾನ್ ಪಟ್ಟಣನಿವಾಸಿಗಳಲ್ಲಿ ಈಗ ಬುದ್ಧಿ ಉಳಿದಿಲ್ಲವೇ? ಎದೋಮಿನ ವಿವೇಕಿಗಳು ಒಳ್ಳೆಯ ಸಲಹೆಗಳನ್ನು ಕೊಡಲು ಸಮರ್ಥರಾಗಿ ಲ್ಲವೇ? ಅವರು ತಮ್ಮ ಜ್ಞಾನವನ್ನು ಕಳೆದು ಕೊಂಡರೇ?

8 ದೆದಾನಿನ ನಿವಾಸಿಗಳೇ, ಓಡಿಹೋಗಿರಿ, ಅಡಗಿ ಕೊಳ್ಳಿರಿ; ಏಕೆಂದರೆ ಏಸಾವನು* ಮಾಡಿದ ತಪ್ಪಿಗಾಗಿ ನಾನು ಅವನನ್ನು ದಂಡಿಸುವೆನು.

9 ‘‘ಕೆಲಸಗಾರರು ನಿಮ್ಮ ದ್ರಾಕ್ಷಿತೋಟಕ್ಕೆ ಬಂದು ದ್ರಾಕ್ಷಿಯನ್ನು ಕೀಳುವರು; ಆದರೆ ಬಳ್ಳಿಯಲ್ಲಿ ಕೆಲವು ದ್ರಾಕ್ಷಿಗಳನ್ನು ಬಿಡುವರು; ರಾತ್ರಿಯಲ್ಲಿ ಕಳ್ಳರು ಬಂದರೆ ಅವರಿಗೆ ಬೇಕಾದಷ್ಟನ್ನು ಮಾತ್ರ ತೆಗೆದುಕೊಳ್ಳುತ್ತಾರೆ.

10 ಆದರೆ ಏಸಾವನಿಂದ ನಾನು ಎಲ್ಲವನ್ನು ಕಿತ್ತು ಕೊಳ್ಳುವೆನು. ಅವನು ಅಡಗಿಕೊಳ್ಳುವ ಎಲ್ಲಾ ಸ್ಥಳ ಗಳನ್ನು ನಾನು ಪತ್ತೆ ಹಚ್ಚುವೆನು. ಅವನು ನನ್ನ ಕಣ್ಣು ತಪ್ಪಿಸಲು ಸಾಧ್ಯವಿಲ್ಲ. ಅವನ ಮಕ್ಕಳು, ಆಪ್ತೇಷ್ಟರು ಮತ್ತು ನೆರೆಹೊರೆಯವರು ಸತ್ತುಹೋಗುವರು.

11 ನಿಮ್ಮ ಅನಾಥಮಕ್ಕಳನ್ನು ನಾನು ಸಂರಕ್ಷಿಸುವೆನು. ನಿಮ್ಮ ವಿಧವೆಯರು ನನ್ನಲ್ಲಿ ಭರವಸೆ ಇಡಲಿ.’’

---

**ಮಲ್ಕಾಮ್** ಅಮ್ಮೋನ್ಯರ ದೇವರು.

**ಗಾದ್ಯರು** ಇಸ್ರೇಲಿನ ಒಂದು ಕುಲ. ಅವರ ಭೂಮಿ ಅಮ್ಮೋನ್ ದೇಶಕ್ಕೆ ಹತ್ತಿರದಲ್ಲಿತ್ತು.

**ರಬ್ಬಾ ಅಮ್ಮೋನ್** ಅಮ್ಮೋನ್ಯರ ರಾಜಧಾನಿ.

**ಏಸಾವ** ಯಾಕೋಬನ ಅವಳಿ ಸಹೋದರ. ಆದರೆ ಇಲ್ಲಿ ಎದೋಮ್ ಎಂದರ್ಥ. ಏಕೆಂದರೆ ಎದೋಮಿನ ಜನರು ಏಸಾವನ ವಂಶಜರು.

12ಯೆಹೋವನು ಇಂತೆನ್ನುತ್ತಾನೆ: ''ಕೆಲವು ಜನರು
ದಂಡನೆಗೆ ಅರ್ಹರಾಗಿರುವದಿಲ್ಲ. ಆದರೂ ಅವರು ಕಷ್ಟ
ಅನುಭವಿಸುವರು. ಎದೋಮೇ, ನೀನು ದಂಡನೆಗೆ
ಯೋಗ್ಯಳಾಗಿರುವೆ. ಆದುದರಿಂದ ನಿಜವಾಗಿಯೂ
ನಿನ್ನನ್ನು ದಂಡಿಸಲಾಗುವುದು. ನಿನಗೆ ಸಿಗಬೇಕಾದ
ದಂಡನೆಯಿಂದ ನೀನು ತಪ್ಪಿಸಿಕೊಳ್ಳಲಾರೆ. ನಿನ್ನನ್ನು
ದಂಡಿಸಲಾಗುವುದು.'' 13ಯೆಹೋವನು ಇಂತೆನ್ನು
ತ್ತಾನೆ, ''ಸ್ವಸಾಮರ್ಥ್ಯದಿಂದ ನಾನು ಈ ಪ್ರಮಾಣ
ಮಾಡುವೆನು. ನಾನು ಆಣೆಯಿಟ್ಟು ಹೇಳುವೆನು. ಬೊಚ್ರ
ನಗರವನ್ನು ನಾಶಮಾಡಲಾಗುವುದು. ಆ ನಗರ ಒಂದು
ಹಾಳು ದಿಬ್ಬವಾಗುವುದು. ಬೇರೆ ನಗರಗಳಿಗೆ ದುರ್ಗತಿ
ಬರಲಿ ಎಂದು ಶಪಿಸುವಾಗ ಜನರು 'ಬೊಚ್ರದಂತೆ
ಹಾಳಾಗಲಿ' ಎಂದು ಈ ನಗರದ ಉದಾಹರಣೆಯನ್ನು
ಕೊಡುವರು. ಜನರು ಈ ನಗರವನ್ನು ಅವಮಾನ ಮಾಡು
ವರು. ಬೊಚ್ರ ನಗರದ ಸುತ್ತಮುತ್ತಲಿನ ಪಟ್ಟಣಗಳು
ಶಾಶ್ವತವಾಗಿ ಹಾಳುಬೀಳುವವು.''

14 ಯೆಹೋವನ ಒಂದು ಸಂದೇಶವನ್ನು ಕೇಳಿದೆ.
ಯೆಹೋವನು ಎಲ್ಲಾ ಜನಾಂಗಗಳಿಗೆ ಸಂದೇಶ
ವಾಹಕರನ್ನು ಕಳುಹಿಸಿದ್ದನು. ಆ ಸಂದೇಶ ಹೀಗಿದೆ:
''ನಿಮ್ಮ ಸೈನ್ಯಗಳನ್ನು ಒಂದಡೆ ಸೇರಿಸಿರಿ. ಯುದ್ಧಕ್ಕೆ
ಸಿದ್ಧರಾಗಿರಿ. ಎದೋಮ್ ಜನಾಂಗದ ವಿರುದ್ಧ
ದಂಡಯಾತ್ರೆ ಮಾಡಿರಿ.

15''ಎದೋಮೇ, ನಾನು ನಿನಗೆ ಪ್ರಮುಖನಾಗಲು
ಬಿಡುವುದಿಲ್ಲ. ಪ್ರತಿಯೊಬ್ಬರು ನಿನ್ನನ್ನು
ದ್ವೇಷಿಸುವರು.
16 ಎದೋಮೇ, ನೀನು ಬೇರೆ ಜನಾಂಗಗಳನ್ನು
ಹೆದರಿಸಿದೆ. ಆದುದರಿಂದ ನೀನು ಮುಖ್ಯವಾದು
ದೆಂದು ನೀನು ಭಾವಿಸಿದೆ. ಆದರೆ ಅದು ನಿನ್ನ
ಮೂರ್ಖತನ. ನಿನ್ನ ಅಹಂಭಾವ ನಿನಗೆ ಮೋಸ
ಮಾಡಿದೆ. ಎದೋಮೇ, ನೀನು ಎತ್ತರದ ಬೆಟ್ಟಗಳ
ಲ್ಲಿರುವೆ. ಬೆಟ್ಟಗುಡ್ಡಗಳಿಂದ ರಕ್ಷಿತವಾದ ಸ್ಥಳ
ಗಳಲ್ಲಿ ನೀನು ವಾಸಿಸುವೆ. ಆದರೆ ನೀನು ರಣಹದ್ದು
ಗೂಡುಕಟ್ಟುವಷ್ಟು ಎತ್ತರದ ಸ್ಥಳದಲ್ಲಿ ನೀನು ಮನೆ
ಕಟ್ಟಿದರೂ ನಾನು ನಿನ್ನನ್ನು ಹಿಡಿಯುತ್ತೇನೆ.
ಅಲ್ಲಿಂದ ನಿನ್ನನ್ನು ಕೆಳಗೆ ತರುತ್ತೇನೆ'' ಇದು
ಯೆಹೋವನ ನುಡಿ.
17''ಎದೋಮನ್ನು ನಾಶ ಮಾಡಲಾಗುವುದು.
ಹಾಳಾದ ನಗರಗಳನ್ನು ಕಂಡು ಜನರು ಬೆರಗಾಗು
ವರು. ನಾಶವಾದ ನಗರಗಳನ್ನು ಕಂಡು ಜನರು
ಆಶ್ಚರ್ಯಚಕಿತರಾಗಿ ಸಿಳ್ಳುಹಾಕುವರು.
18 ಸೊದೋಮ್ ಗೊಮೋರ* ನಗರಗಳಂತೆಯೂ
ಅವುಗಳ ಸುತ್ತಲಿನ ಪಟ್ಟಣಗಳಂತೆಯೂ
ಎದೋಮ್ ನಾಶವಾಗುವುದು. ಅಲ್ಲಿ
ಯಾರೂ ವಾಸಮಾಡಲಾರರು'' ಯೆಹೋವನು
ಇಂತೆನ್ನುತ್ತಾನೆ:

19''ಜೋರ್ಡನ್ ನದಿಯ ಸಮೀಪದ ದಟ್ಟವಾದ ಕಾಡಿ
ನಿಂದ ಫಕ್ಕನೆ ಒಂದು ಸಿಂಹ ಬರುವದು. ಅದು ಹೊಲಗ
ಳಲ್ಲಿದ್ದ ಜನರ ದನಕುರಿಗಳ ಹಟ್ಟಿಗಳಿಗೆ ನುಗ್ಗುವುದು.
ನಾನು ಆ ಸಿಂಹದಂತೆ ಇದ್ದೇನೆ. ನಾನು ಎದೋಮ್
ನಗರಕ್ಕೆ ಹೋಗಿ ಆ ಜನರನ್ನು ಹೆದರಿಸುವೆನು; ಅವರು
ಓಡಿಹೋಗುವಂತೆ ಮಾಡುವೆನು. ಅವರ ತರುಣರಲ್ಲಿ
ಯಾರೂ ನನ್ನನ್ನು ತಡೆಯಲಾರರು. ನನ್ನಂತೆ ಯಾರೂ
ಇಲ್ಲ. ಯಾರೂ ನನ್ನನ್ನು ಪ್ರತಿಭಟಿಸುವದಿಲ್ಲ. ಅವರ
ನಾಯಕರಲ್ಲಿ ಯಾರೂ ನನ್ನ ವಿರುದ್ಧ ನಿಲ್ಲುವದಿಲ್ಲ.''

20 ಎದೋಮ್ಯರಿಗೆ ಯೆಹೋವನು ಮಾಡಬೇಕೆಂದಿ
ರುವುದನ್ನು ಕೇಳಿರಿ. ತೇಮಾನ್ಯರ* ಬಗ್ಗೆ
ಯೆಹೋವನು ಏನು ನಿರ್ಧರಿಸಿದ್ದಾನೆಂಬುದನ್ನು
ಕೇಳಿರಿ. ಎದೋಮಿನ ಕುರಿಮರಿಗಳನ್ನು (ಜನ
ರನ್ನು) ಶತ್ರು ಎಳೆದುಕೊಂಡು ಹೋಗುವನು.
ಸಂಭವಿಸಿದ ಸಂಗತಿಯನ್ನು ನೋಡಿ ಎದೋಮಿನ
ಹುಲ್ಲುಗಾವಲುಗಳು ಬೆದರುವವು.
21 ಎದೋಮ್ಯರ ಪತನದ ಶಬ್ಧಕ್ಕೆ ಭೂಮಿಯು
ನಡುಗುವುದು. ಅವರ ಗೋಳಾಟದ ಧ್ವನಿಯು
ಕೆಂಪು ಸಮುದ್ರದವರೆಗೂ ಕೇಳಿಸುವುದು.
22 ಯೆಹೋವನು ತಾನು ಎರಗಬೇಕಾದ ಪ್ರಾಣಿಯ
ಮೇಲೆ ಹಾರಾಡುವ ರಣಹದ್ದಿನಂತೆ ಇರುವನು.
ಆತನು ಬೊಚ್ರ ನಗರದ ಮೇಲೆ ತನ್ನ ರೆಕ್ಕೆಗಳನ್ನು
ಪಸರಿಸುವ ರಣಹದ್ದಿನಂತಿದ್ದಾನೆ. ಆ ಸಮಯದಲ್ಲಿ
ಎದೋಮಿನ ಸೈನಿಕರು ಭಯಪಡುವರು. ಪ್ರಸವ
ವೇದನೆಪಡುವ ಹೆಂಗಸಿನಂತೆ ಅವರು ಭಯದಿಂದ
ಗೋಳಾಡುವರು.

### ದಮಸ್ಕದ ವಿಷಯವಾಗಿ ದೈವೋಕ್ತಿ

23ಈ ಸಂದೇಶವು ದಮಸ್ಕ ನಗರದ ಕುರಿತಾಗಿದೆ:

''ಹಮಾತ್ ಮತ್ತು ಅರ್ಪಾದ್ ನಗರಗಳು ಹೆದರಿ
ಕೊಂಡಿವೆ. ಅವು ಕೆಟ್ಟ ಸಮಾಚಾರವನ್ನು ಕೇಳಿದ್ದ

---

**ಸೊದೋಮ್ ಮತ್ತು ಗೊಮೋರ** ಎರಡು ನಗರಗಳು, ಅಲ್ಲಿಯ ಜನರು ದುಷ್ಟರಾಗಿದ್ದುದರಿಂದ ದೇವರು ಆ ನಗರಗಳನ್ನು ನಾಶಮಾಡಿದನು.

**ತೇಮಾನ್** ಈ ಪಟ್ಟಣವು ಎದೋಮಿನ ಉತ್ತರ ಭಾಗದಲ್ಲಿ ಇತ್ತು.

ರಿಂದ ಹೆದರಿಕೊಂಡಿವೆ. ಅವುಗಳು ನಿರಾಶೆ
ಗೊಂಡಿವೆ. ಅವು ಆತಂಕಪಡುತ್ತಿವೆ ಮತ್ತು ಭಯ
ಪಡುತ್ತಿವೆ.
24 ದಮಸ್ಕ ನಗರವು ನಿರ್ಬಲವಾಗಿದೆ. ಜನರು ಓಡಿ
ಹೋಗಬಯಸುತ್ತಾರೆ, ಜನರು ಗಾಬರಿಗೊಂಡಿ
ದ್ದಾರೆ. ಪ್ರಸವವೇದನೆಪಡುವ ಸ್ತ್ರೀಯಂತೆ ಸಂಕಟ
ಪಡುತ್ತಿದ್ದಾರೆ.
25 ‘‘ದಮಸ್ಕವು ಸಂತೋಷಭರಿತವಾದ ನಗರವಾಗಿದೆ.
ಜನರು ಇನ್ನೂ ಆ ‘ಮೋಜಿನ ನಗರವನ್ನು’
ಬಿಟ್ಟಿಲ್ಲ.
26 ಆದುದರಿಂದ ತರುಣರು ನಗರದ ಚೌಕಗಳಲ್ಲಿ
ಮರಣ ಹೊಂದುವರು. ಆ ಕಾಲದಲ್ಲಿ ದಮಸ್ಕದ
ಎಲ್ಲಾ ಸೈನಿಕರು ಕೊಲ್ಲಲ್ಪಡುವರು.’’ ಇದು ಸರ್ವ
ಶಕ್ತನಾದ ಯೆಹೋವನ ನುಡಿ.

27 ‘‘ದಮಸ್ಕದ ಗೋಡೆಗಳಿಗೆ ನಾನು ಬೆಂಕಿ ಹಚ್ಚುವೆನು.
ಆ ಬೆಂಕಿಯು ಬೆನ್‌ಹದದನ ಭದ್ರವಾದ ಕೋಟೆ
ಯನ್ನು ಸುಟ್ಟುಹಾಕುವುದು.’’

## ಕೇದಾರ ಮತ್ತು ಹಾಚೋರಿನ ಬಗ್ಗೆ ಸಂದೇಶ

28 ಈ ಸಂದೇಶವು ಕೇದಾರ್ ಕುಲವನ್ನೂ ಹಾಚೋರಿನ
ಅಧಿಪತಿಗಳನ್ನೂ ಕುರಿತದ್ದು. ಬಾಬಿಲೋನಿನ ರಾಜನಾದ
ನೆಬೂಕದ್ನೆಚ್ಚರನು ಅವರನ್ನು ಸೋಲಿಸಿದನು.

ಯೆಹೋವನು ಇಂತೆನ್ನುತ್ತಾನೆ: ‘‘ಹೋಗಿ
ಕೇದಾರ ಕುಲದವರ ಮೇಲೆ ಧಾಳಿ ಮಾಡಿರಿ.
ಪೂರ್ವದಿಕ್ಕಿನ ಜನರನ್ನು ನಾಶಮಾಡಿರಿ.

29 ‘‘ಅವರ ಗುಡಾರಗಳನ್ನು ಮತ್ತು ಹಿಂಡುಗಳನ್ನು
ತೆಗೆದುಕೊಂಡು ಹೋಗಲಾಗುವುದು. ಅವರ
ಗುಡಾರಗಳನ್ನು ಅವರ ಎಲ್ಲಾ ವಸ್ತುಗಳನ್ನು ಎತ್ತಿ
ಕೊಂಡು ಹೋಗಲಾಗುವುದು. ಅವರ ಶತ್ರುಗಳು
ಒಂಟೆಗಳನ್ನು ತೆಗೆದುಕೊಂಡು ಹೋಗುವರು.
‘ನಮ್ಮ ಸುತ್ತಲೂ ಭಯಂಕರ ಘಟನೆಗಳು ನಡೆ
ಯುತ್ತಿವೆ’ ಎಂದು ತಮ್ಮ ತಮ್ಮಲ್ಲಿಯೇ ಕೂಗಿ
ಕೊಳ್ಳುವರು.
30 ಹಾಚೋರಿನ ನಿವಾಸಿಗಳೇ, ಬೇಗನೆ ಓಡಿ
ಹೋಗಿರಿ, ಅಡಗಿಕೊಳ್ಳುವದಕ್ಕೆ ಒಂದು ಒಳ್ಳೆಯ
ಸ್ಥಳವನ್ನು ಹುಡುಕಿಕೊಳ್ಳಿರಿ.’’ ಇದು ಯೆಹೋವನ
ಸಂದೇಶ. ‘‘ನೆಬೂಕದ್ನೆಚ್ಚರನು ನಿಮ್ಮ ವಿರುದ್ಧ
ಯೋಜನೆ ಮಾಡಿದ್ದಾನೆ. ನಿಮ್ಮನ್ನು ಸೋಲಿಸಲು
ಒಳ್ಳೆಯ ಸಂಚನ್ನು ಮಾಡಿದ್ದಾನೆ.

31 ‘‘ಒಂದು ಜನಾಂಗವು ಯಾರೂ ತಮ್ಮನ್ನು ಸೋಲಿಸ
ಲಾರರು ಎಂದು ನೆಮ್ಮದಿಯಿಂದಲೂ ಸಮಾಧಾನ
ದಿಂದಲೂ ಇದೆ. ಅದು ತನ್ನ ರಕ್ಷಣೆಗಾಗಿ ಒಂದು
ಕೋಟೆಯನ್ನಾಗಲೀ ಒಂದು ಬಾಗಿಲನ್ನಾಗಲೀ
ಹೊಂದಿಲ್ಲ. ಆ ಜನರು ಪ್ರತ್ಯೇಕವಾಗಿ ವಾಸವಾಗಿ
ದ್ದಾರೆ. ‘ಆ ಜನಾಂಗದ ಮೇಲೆ ಧಾಳಿ ಮಾಡಿರಿ.’
ಎಂದು ಯೆಹೋವನು ಹೇಳಿದನು.
32 ವೈರಿಯು ಅವರ ಒಂಟೆಗಳನ್ನು ಮತ್ತು ಅವರ ದನ
ಗಳ ಮಂದೆಗಳನ್ನು ಅಪಹರಿಸುವನು. ವೈರಿಯು
ಅವರ ದೊಡ್ಡದೊಡ್ಡ ಮಂದೆಗಳನ್ನು ಅಪಹರಿಸು
ವನು. ತಮ್ಮ ಗಡ್ಡ ಕೂದಲಿನ ಮೂಲೆಗಳನ್ನು*
ಕತ್ತರಿಸಿಕೊಂಡ ಜನರನ್ನು ನಾನು ಭೂಮಂಡಲದ
ಎಲ್ಲೆಡೆಗಳಲ್ಲಿ ಚದರಿಸುವೆನು. ಎಲ್ಲಾ ಕಡೆ
ಯಿಂದಲೂ ಅವರ ಮೇಲೆ ವಿಪತ್ತುಗಳನ್ನು ಬರ
ಮಾಡುವನು.’’ ಇದು ಯೆಹೋವನ ನುಡಿ.
33 ‘‘ಹಾಚೋರ್ ಪ್ರದೇಶವು ಕಾಡುನಾಯಿಗಳ
ನಿವಾಸ ಸ್ಥಾನವಾಗುವುದು. ಅದು ಶಾಶ್ವತವಾಗಿ
ಒಂದು ಬರಿದಾದ ಮರುಭೂಮಿಯಾಗುವುದು.
ಅಲ್ಲಿ ಯಾರೂ ವಾಸಮಾಡಲಾರರು. ಆ ಸ್ಥಳದಲ್ಲಿ
ಯಾವ ಮನುಷ್ಯನೂ ವಾಸಮಾಡುವದಿಲ್ಲ.’’

## ಏಲಾಮಿನ ಬಗ್ಗೆ ದೈವೋಕ್ತಿ

34 ಚಿದ್ಕೀಯನು ಯೆಹೂದದ ರಾಜನಾದ ಹೊಸದರ
ಲ್ಲಿಯೇ ಪ್ರವಾದಿಯಾದ ಯೆರೆಮೀಯನು ಯೆಹೋವ
ನಿಂದ ಒಂದು ಸಂದೇಶವನ್ನು ಪಡೆದನು. ಈ ಸಂದೇಶವು
ಏಲಾಮ್ ಜನಾಂಗವನ್ನು ಕುರಿತದ್ದು.

35 ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ:
‘‘ನಾನು ಅತಿ ಶೀಘ್ರದಲ್ಲಿ ಏಲಾಮಿನ ಬಿಲ್ಲನ್ನು
ಮುರಿದುಹಾಕುವೆನು. ಏಲಾಮಿಗೆ ಬಿಲ್ಲು ಬಹು
ಮುಖ್ಯವಾದ ಆಯುಧವಾಗಿದೆ.
36 ನಾನು ಏಲಾಮಿನ ಮೇಲೆ ನಾಲ್ಕು ಗಾಳಿಗಳನ್ನು
ಆಕಾಶದ ನಾಲ್ಕು ಮೂಲೆಗಳಿಂದ ಬರಮಾಡು
ವೆನು. ಆ ನಾಲ್ಕು ಗಾಳಿಗಳು ಬೀಸುವ ಎಲ್ಲಾ ಕಡೆ
ಗಳಲ್ಲಿಯೂ ಏಲಾಮ್ಯರನ್ನು ಚದುರಿಸುವೆನು.
ಏಲಾಮಿನ ಸೆರೆಯಾಳುಗಳು ಪ್ರತಿಯೊಂದು
ರಾಷ್ಟ್ರಗಳಲ್ಲಿಯೂ ಸಿಕ್ಕುವರು.
37 ಅವರ ಶತ್ರುಗಳ ಕಣ್ಣೆದುರಿನಲ್ಲಿಯೇ ನಾನು ಏಲಾ
ಮನ್ನು ಚೂರುಚೂರು ಮಾಡುವೆನು. ಏಲಾಮ್ಯ

---

**ಗಡ್ಡ … ಮೂಲೆಗಳನ್ನು** ಯೆಹೂದ್ಯರು ತಮ್ಮ ಗಡ್ಡದ ಕೂದಲನ್ನು ವಿದೇಶಿಯರ ರೀತಿಯಲ್ಲಿ ಕತ್ತರಿಸಿಕೊಳ್ಳುತ್ತಿರಲಿಲ್ಲ. ನೋಡಿ ವಿಮೋಚನಕಾಂಡ19:27

ರನ್ನು ಕೊಲ್ಲಬೇಕೆಂದಿರುವ ಜನರೆದುರಿಗೆ ನಾನು
ಎಲಾಮ್ಯರನ್ನು ಮುರಿದುಬಿಡುವೆನು. ನಾನು
ಅವರ ಮೇಲೆ ಭಯಂಕರವಾದ ವಿಪತ್ತುಗಳನ್ನು
ತರುವೆನು. ನನಗೆ ಎಷ್ಟು ಕೋಪ ಬಂದಿದೆ
ಎಂಬುದನ್ನು ನಾನು ಅವರಿಗೆ ತೋರಿಸುವೆನು.''
ಇದು ಯೆಹೋವನ ನುಡಿ. ''ಏಲಾಮನ್ನು ಬೆನ್ನ
ಟ್ಟಲು ನಾನೊಂದು ಖಡ್ಗವನ್ನು ಕಳುಹಿಸುವೆನು.
ನಾನು ಏಲಾಮ್ಯರನ್ನೆಲ್ಲ ಕೊಂದುಹಾಕುವವರೆಗೆ
ಆ ಖಡ್ಗವು ಅವರನ್ನು ಬೆನ್ನಟ್ಟುವುದು.
38 ಏಲಾಮಿನ ಆಧಿಪತ್ಯ ನನಗೆ ಸೇರಿದ್ದು ಎಂಬುದನ್ನು
ನಾನು ಏಲಾಮ್ಯರಿಗೆ ತೋರಿಸಿಕೊಡುವೆನು.
ನಾನು ಅಲ್ಲಿಯ ರಾಜನನ್ನು ಮತ್ತು ರಾಜನ
ಅಧಿಕಾರಿಗಳನ್ನು ನಾಶಮಾಡುವೆನು'' ಇದು
ಯೆಹೋವನ ನುಡಿ.
39 ''ಆದರೆ ಭವಿಷ್ಯದಲ್ಲಿ ಏಲಾಮಿಗೆ ಒಳ್ಳೆಯದನ್ನು
ಮಾಡುವೆನು.'' ಇದು ಯೆಹೋವನ ನುಡಿ.

## ಬಾಬಿಲೋನಿನ ಬಗ್ಗೆ ದೈವೋಕ್ತಿ

50 ಬಾಬಿಲೋನ್ ಮತ್ತು ಬಾಬಿಲೋನಿನ ಜನರ
ಬಗ್ಗೆ ಯೆಹೋವನ ಸಂದೇಶವಿದು. ಈ ಸಂದೇಶ
ವನ್ನು ಯೆಹೋವನು ಯೆರೆಮೀಯನ ಮುಖಾಂತರ
ಕೊಟ್ಟನು.

2 ''ಎಲ್ಲಾ ಜನಾಂಗಗಳಲ್ಲಿ ಪ್ರಚಾರ ಪಡಿಸಿರಿ, ಒಂದು
ಧ್ವಜವನ್ನು ಹಾರಿಸಿ ಈ ಸಂದೇಶವನ್ನೆಲ್ಲಾ ಸಾರಿರಿ.
'ಬಾಬಿಲೋನ್ ಜನಾಂಗವನ್ನು ವಶಪಡಿಸಿಕೊಳ್ಳ
ಲಾಗುವುದು. ಬೇಲ್* ದೇವತೆ ನಾಚಿಕೆ
ಪಡುವುದು. ಮೆರೋದಾಕ್* ದೇವತೆಯು
ಭಯಪಡುವುದು. ಬಾಬಿಲೋನಿನ ವಿಗ್ರಹಗಳು
ನಾಚಿಕೆಪಡುವವು. ಅಲ್ಲಿಯ ದೇವತೆಗಳು ಹೆದರಿ
ಕೊಳ್ಳುವವು.',
3 ಉತ್ತರದ ಒಂದು ಜನಾಂಗವು ಬಾಬಿಲೋನಿನ
ಮೇಲೆ ಧಾಳಿ ಮಾಡುವುದು. ಆ ಜನಾಂಗವು
ಬಾಬಿಲೋನನ್ನು ಒಂದು ಬರಿದಾದ ಮರು
ಭೂಮಿಯನ್ನಾಗಿ ಮಾಡುವದು. ಅಲ್ಲಿ ಯಾರೂ
ವಾಸಮಾಡಲಾರರು. ಪ್ರಾಣಿಗಳು ಮತ್ತು ಮನು
ಷ್ಯರು ಅಲ್ಲಿಂದ ಪಲಾಯನ ಮಾಡುವರು.''
4 ಯೆಹೋವನು ಇಂತೆನ್ನುತ್ತಾನೆ: ''ಆ ಸಮಯದಲ್ಲಿ
ಇಸ್ರೇಲಿನ ಮತ್ತು ಯೆಹೂದದ ಜನರು ಒಟ್ಟಿಗೆ
ಸೇರುವರು. ಅವರು ಒಟ್ಟುಗೂಡಿ ಬಹಳವಾಗಿ
ಗೋಳಾಡುವರು; ತಮ್ಮ ದೇವರಾದ ಯೆಹೋವ
ನನ್ನು ಹುಡುಕಲು ಹೋಗುವರು.
5 ಅವರು ಚೀಯೋನಿಗೆ ಹೋಗುವ ಮಾರ್ಗವನ್ನು
ವಿಚಾರಿಸುವರು. ಆ ದಿಕ್ಕಿನಲ್ಲಿ ಹೋಗಲು
ಪ್ರಾರಂಭಿಸುವರು. 'ಬನ್ನಿ ನಾವೆಲ್ಲರೂ ಯೆಹೋ
ವನ ಆಶ್ರಯಪಡೆಯೋಣ. ಆತನೊಂದಿಗೆ ಶಾಶ್ವತ
ವಾದ ಮತ್ತು ನಾವೆಂದೂ ಮರೆಯಲಾಗದ ಒಡಂ
ಬಡಿಕೆಯನ್ನು ಮಾಡಿಕೊಳ್ಳೋಣ' ಎಂದು ಅವರು
ಹೇಳುವರು.
6 ''ನನ್ನ ಜನರು ತಪ್ಪಿಸಿಕೊಂಡ ಕುರಿಗಳಂತಿದ್ದಾರೆ.
ಅವರ ಕುರುಬರು ಅವರನ್ನು ತಪ್ಪುದಾರಿಗೆ ಎಳೆದಿ
ದ್ದಾರೆ. ಅವರ ನಾಯಕರುಗಳು ಅವರನ್ನು ಬೆಟ್ಟ
ಗಳಲ್ಲಿ ಅಲೆಯುವಂತೆ ಮಾಡಿದ್ದಾರೆ. ಅವರ
ವಿಶ್ರಾಂತಿಸ್ಥಾನವನ್ನು ಅವರು ಮರೆತುಬಿಟ್ಟಿದ್ದಾರೆ.
7 ನನ್ನ ಜನರನ್ನು ಕಂಡವರೆಲ್ಲ ಅವರನ್ನು ನೋಯಿಸಿ
ದ್ದಾರೆ. ಆ ಶತ್ರುಗಳು, 'ನಾವು ಮಾಡಿದ್ದು ತಪ್ಪಲ್ಲ
ಅವರು ಯೆಹೋವನ ವಿರುದ್ಧ ಪಾಪ ಮಾಡಿ
ದ್ದಾರೆ. ಯೆಹೋವನು ಅವರ ನಿಜವಾದ ನಿವಾಸ
ವಾಗಿದ್ದನು. ಯೆಹೋವನು ಅವರ ಪೂರ್ವಿಕರು
ನಂಬಿದ್ದ ದೇವರಾಗಿದ್ದನು' ಎನ್ನುವರು.

8 ''ಬಾಬಿಲೋನಿನಿಂದ ಓಡಿಹೋಗಿರಿ. ಬಾಬಿಲೋ
ನಿನ ಪ್ರದೇಶವನ್ನು ಬಿಟ್ಟುಬಿಡಿ. ಕುರಿಮಂದೆಯ
ಮುಂದೆ ಹೋಗುವ ಹೋತದಂತೆ ಹೋಗಿರಿ.
9 ಉತ್ತರ ದಿಕ್ಕಿನ ಹಲವು ಜನಾಂಗಗಳನ್ನು ನಾನು
ಒಟ್ಟುಗೂಡಿಸಿ ತರುವೆನು. ಆ ಜನಾಂಗಗಳ
ಸಮುದಾಯವು ಬಾಬಿಲೋನಿನ ವಿರುದ್ಧ
ಯುದ್ಧಕ್ಕೆ ಸಿದ್ಧವಾಗುತ್ತದೆ. ಬಾಬಿಲೋನ್ ಅವ
ರಿಗೆ ವಶವಾಗುವುದು. ಆ ಜನಾಂಗಗಳ ಜನರು
ಬಾಬಿಲೋನಿನ ಮೇಲೆ ಹಲವು ಬಾಣಗಳನ್ನು
ಪ್ರಯೋಗಮಾಡುವರು. ಆ ಬಾಣಗಳೆಲ್ಲ ಬರಿಗೈ
ಯಲ್ಲಿ ಯುದ್ಧದಿಂದ ಹಿಂದಿರುಗದ ಶೂರ
ಸೈನಿಕರಂತಿರುವವು.
10 ಕಸ್ದೀಯ ಸಂಪತ್ತನ್ನೆಲ್ಲ ಶತ್ರು ಕೊಳ್ಳೆಹೊಡೆಯು
ವನು. ಶತ್ರು ಸೈನಿಕರು ತಮಗೆ ಬೇಕಾದುದ್ದೆಲ್ಲ
ವನ್ನು ತೆಗೆದುಕೊಳ್ಳುವರು '' ಇದು ಯೆಹೋವನ
ನುಡಿ.
11 ''ಬಾಬಿಲೋನೇ ನೀನು ಉಲ್ಲಾಸದಲ್ಲಿರುವೆ ಮತ್ತು
ಸಂತೋಷದಲ್ಲಿರುವೆ. ನೀನು ನನ್ನ ಪ್ರದೇಶವನ್ನು
ತೆಗೆದುಕೊಂಡೆ. ನೀನು ಕಣತುಳಿಯುವ ಕಡಸಿನ
ಹಾಗೆ ಕುಣಿದಾಡುತ್ತಿರುವೆ. ನಿನ್ನ ನಗು ಕುದುರೆಗಳ
ಸಂತೋಷಭರಿತ ಕೆನೆತದಂತೆ ಇದೆ.

**ಬೇಲ್** ಮೆರೋದಾಕ್ ದೇವತೆಯ ಇನ್ನೊಂದು ಹೆಸರು.

**ಮೆರೋದಾಕ್** ಬಾಬಿಲೋನಿಯರ ಪ್ರಮುಖ ದೇವತೆ.

12 ‘‘ಈಗ ನಿಮ್ಮ ತಾಯಿಯು ಬಹಳ ನಾಚಿಕೆ ಪಡುವಳು.
ನಿಮಗೆ ಜನ್ಮಕೊಟ್ಟ ಆ ಸ್ತ್ರೀಯು ಅಪಮಾನ
ಹೊಂದುವಳು. ಎಲ್ಲಾ ಜನಾಂಗಗಳಲ್ಲಿ ಬಾಬಿ
ಲೋನ್ ಕನಿಷ್ಟವೆನಿಸುವುದು. ಅದು ಬರಿದಾದ
ಮರುಭೂಮಿಯಂತಾಗುವುದು.
13 ದೇವರು ಅವರ ಮೇಲೆ ತನ್ನ ಕೋಪವನ್ನು
ಪ್ರಕಟಿಸುವನು ಆದುದರಿಂದ ಅಲ್ಲಿ ಯಾರೂ ವಾಸ
ಮಾಡಲಾರರು. ಬಾಬಿಲೋನ್ ನಗರವು
ಸಂಪೂರ್ಣವಾಗಿ ನಿರ್ಜನವಾಗುವುದು. ‘‘ಬಾಬಿ
ಲೋನಿನಿಂದ ಹಾದುಹೋಗುವವರೆಲ್ಲ ಭಯ
ಪಡುವರು. ಅದಕ್ಕೆ ಉಂಟಾದ ದುರ್ಗತಿಯನ್ನು
ನೋಡಿ ಅವರು ತಮ್ಮ ತಲೆಯಾಡಿಸುವರು.
14 ‘‘ಬಾಬಿಲೋನಿನ ವಿರುದ್ಧ ಯುದ್ಧಕ್ಕೆ ಸಿದ್ಧತೆಗಳನ್ನು
ಮಾಡಿರಿ. ಬಿಲ್ಲುಗಾರರೇ, ಬಾಬಿಲೋನಿನ ಮೇಲೆ
ಬಾಣ ಪ್ರಯೋಗ ಮಾಡಿರಿ. ನಿಮ್ಮ ಬಾಣಗಳಲ್ಲಿ
ಒಂದನ್ನೂ ಉಳಿಸಿಕೊಳ್ಳಬೇಡಿರಿ. ಯೆಹೋವನ
ವಿರುದ್ಧವಾಗಿ ಪಾಪ ಮಾಡಿದೆ.
15 ಬಾಬಿಲೋನಿನ ಸುತ್ತಲೂ ಇರುವ ಸೈನಿಕರೇ ಜಯ
ಘೋಷಮಾಡಿರಿ. ಈಗ ಬಾಬಿಲೋನ್ ಶರಣಾ
ಗತವಾಗಿದೆ. ಅದರ ಪೌಳಿಗೋಡೆಗಳನ್ನು ಮತ್ತು
ಕೊತ್ತಲಗಳನ್ನು ಬೀಳಿಸಲಾಗಿದೆ. ಯೆಹೋವನು
ಅವರಿಗೆ ತಕ್ಕ ಶಿಕ್ಷೆಯನ್ನು ಕೊಡುತ್ತಿದ್ದಾನೆ. ಎಲ್ಲಾ
ಜನಾಂಗಗಳವರು ಬಾಬಿಲೋನಿಗೆ ತಕ್ಕ
ಶಿಕ್ಷೆಯನ್ನು ಕೊಡಬೇಕು.
16 ಬಾಬಿಲೋನಿನ ಜನರಿಗೆ ಬೀಜಗಳನ್ನು ಬಿತ್ತಲು
ಬಿಡಬೇಡಿ. ಸುಗ್ಗಿ ಮಾಡಲು ಅವರಿಗೆ ಬಿಡಬೇಡಿ.
ಬಾಬಿಲೋನಿನ ಸೈನಿಕರು ಹಲವಾರು ಸೆರೆಯಾಳು
ಗಳನ್ನು ಹಿಡಿದುತಂದಿದ್ದಾರೆ. ಈಗ ಶತ್ರು ಸೈನಿಕರು
ಬಂದುದರಿಂದ ಆ ಸೆರೆಯಾಳುಗಳು ತಮ್ಮ
ಪ್ರದೇಶಗಳಿಗೆ ಹಿಂತಿರುಗುತ್ತಿದ್ದಾರೆ, ಆ ಸೆರೆ
ಯಾಳುಗಳು ತಮ್ಮ ದೇಶಗಳಿಗೆ ಓಡುತ್ತಿದ್ದಾರೆ.
17 ‘‘ಇಸ್ರೇಲು ದೇಶಗಳಲ್ಲೆಲ್ಲಾ ಚದರಿಹೋದ ಕುರಿ
ಹಿಂಡಿನಂತಾಗಿದೆ. ಸಿಂಹಗಳಿಗೆ ಹೆದರಿ ಓಡಿ
ಹೋದ ಕುರಿಗಳಂತಾಗಿದೆ ಇಸ್ರೇಲು. ಅದನ್ನು
ತಿಂದು ಮುಗಿಸಿದ ಮೊದಲನೆ ಸಿಂಹವೆಂದರೆ
ಅಶ್ಶೂರದ ರಾಜನು. ಅದರ ಎಲುಬುಗಳನ್ನು
ಜಗಿದ ಕೊನೆಯ ಸಿಂಹವೆಂದರೆ ಬಾಬಿಲೋನಿನ
ರಾಜನಾದ ನೆಬೂಕದ್ನೆಚ್ಚರನು.’’
18 ಇಸ್ರೇಲಿನ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ಹೀಗೆಂದನು: ‘‘ನಾನು ಬಾಬಿ
ಲೋನಿನ ರಾಜನನ್ನು ಮತ್ತು ಅವನ ದೇಶವನ್ನು
ಬಹುಬೇಗ ದಂಡಿಸುವೆನು. ಅಶ್ಶೂರದ ರಾಜ
ನನ್ನು ದಂಡಿಸಿದಂತೆ ನಾನು ಅವನನ್ನು
ದಂಡಿಸುವೆನು.
19 ಆದರೆ ಇಸ್ರೇಲನ್ನು ಪುನಃ ಅದರ ಹುಲ್ಲುಗಾವಲಿಗೆ
ತರುವೆನು. ಅದು ಕರ್ಮೆಲ್ ಬೆಟ್ಟದ ಮೇಲೆ ಮತ್ತು
ಬಾಷಾನಿನ ಪ್ರದೇಶದಲ್ಲಿ ಮೇಯುವದು. ಅದು
ತಿಂದು ತೇಗುವದು. ಅದು ಎಫ್ರಾಯೀಮಿನ
ಮತ್ತು ಗಿಲ್ಯಾದಿನ ಬೆಟ್ಟಗಳಲ್ಲಿ ತಿಂದು ತೃಪ್ತಿ
ಪಡುವದು.’’
20 ಇದು ಯೆಹೋವನ ನುಡಿ. ‘‘ಆ ಸಮಯದಲ್ಲಿ
ಜನರು ಇಸ್ರೇಲಿನ ದೋಷವನ್ನು ಕಂಡು
ಹಿಡಿಯಲು ಪ್ರಯತ್ನಿಸುವರು. ಆದರೆ ಯಾವ
ದೋಷಗಳೂ ಇರುವದಿಲ್ಲ. ಜನರು ಯೆಹೂದದ
ಪಾಪಗಳನ್ನು ಹುಡುಕುವ ಪ್ರಯತ್ನ ಮಾಡುವರು.
ಆದರೆ ಯಾವ ಪಾಪಗಳೂ ಸಿಕ್ಕುವದಿಲ್ಲ. ಏಕೆಂದರೆ
ಇಸ್ರೇಲಿನ ಮತ್ತು ಯೆಹೂದದ ಜನರಲ್ಲಿ ಅಳಿ
ದುಳಿದ ಕೆಲವು ಜನರನ್ನು ನಾನು ರಕ್ಷಿಸುತ್ತೇನೆ.
ಅವರ ಪಾಪಗಳನ್ನೆಲ್ಲ ಕ್ಷಮಿಸಿದ್ದೇನೆ.’’
21 ಯೆಹೋವನು ಇಂತೆನ್ನುತ್ತಾನೆ: ‘‘ಮೆರಾಥ
ಯಿಮ್ ದೇಶದ ಮೇಲೆ ಧಾಳಿ ಮಾಡಿರಿ.
ಪೆಕೋದ ಪ್ರದೇಶದಲ್ಲಿ ವಾಸಮಾಡುವ ಜನಗಳ
ಮೇಲೆ ಧಾಳಿ ಮಾಡಿರಿ. ಅವರ ಮೇಲೆ ಧಾಳಿ
ಮಾಡಿ ಅವರನ್ನು ಕೊಂದು ಸಂಪೂರ್ಣವಾಗಿ ನಾಶ
ಮಾಡಿರಿ. ನಾನು ನಿಮಗೆ ಆಜ್ಞಾಪಿಸಿದ್ದೆಲ್ಲವನ್ನು
ಮಾಡಿರಿ.

22 ‘‘ಯುದ್ಧದ ಆರ್ಭಟವು ದೇಶದಲ್ಲೆಲ್ಲ ಕೇಳಿ
ಬರುತ್ತಿದೆ. ಅದು ಮಹಾವಿನಾಶದ ಧ್ವನಿಯಾಗಿದೆ.
23 ಬಾಬಿಲೋನು ಇಡೀ ಭೂಮಂಡಲಕ್ಕೆ
‘ಸುತ್ತಿಗೆ‘ಯಂತಿದೆ. ಆದರೆ ಈಗ ಆ ‘ಸುತ್ತಿಗೆ‘ಯು
ಮುರಿದು ಚೂರುಚೂರಾಗಿದೆ. ಬಾಬಿಲೋನ್
ನಿಜವಾಗಿಯೂ ಎಲ್ಲಕ್ಕಿಂತಲೂ ಹೆಚ್ಚು ಹಾಳಾದ
ಜನಾಂಗವಾಗಿದೆ.
24 ಬಾಬಿಲೋನೇ, ನಾನು ನಿನಗಾಗಿ ಒಂದು ಬಲೆ
ಯನ್ನು ಒಡ್ಡಿದೆ. ನೀನು ತಿಳಿಯದೆ ಸಿಕ್ಕಿಹಾಕಿ
ಕೊಂಡೆ. ನೀನು ಯೆಹೋವನ ವಿರುದ್ಧ ಹೋರಾ
ಡಿದೆ. ಆದುದರಿಂದ ನಿನ್ನನ್ನು ಹುಡುಕಿ ವಶಪಡಿಸಿ
ಕೊಳ್ಳಲಾಯಿತು.
25 ಯೆಹೋವನು ತನ್ನ ಆಯುಧಶಾಲೆಯನ್ನು ತೆರೆದಿ
ದ್ದಾನೆ. ಆತನು ತನ್ನ ಆಯುಧಶಾಲೆಯಿಂದ ತನ್ನ
ರೋಷದ ಶಸ್ತ್ರಾಸ್ತ್ರಗಳನ್ನು ಹೊರತೆಗೆದಿದ್ದಾನೆ.
ತಾನು ಮಾಡಬೇಕಾದ ಕಾರ್ಯಕ್ಕಾಗಿ ಸರ್ವಶಕ್ತ
ನಾದ ಆತನು ಆ ಶಸ್ತ್ರಾಸ್ತ್ರಗಳನ್ನು ಹೊರಗೆ

ತೆಗೆದಿದ್ದಾನೆ. ಕಸ್ದೀಯರ ದೇಶದಲ್ಲಿ ಆತನು
ಮಾಡಬೇಕಾದ ಕಾರ್ಯವೊಂದಿದೆ.
26 ''ಅತಿ ದೂರದಿಂದ ಬಾಬಿಲೋನಿನ ಮೇಲೆ
ಬೀಳಲು ಬನ್ನಿ. ಅದರ ಧಾನ್ಯದ ಕಣಜಗಳನ್ನು ತೆರೆ
ಯಿರಿ. ಬಾಬಿಲೋನನ್ನು ಸಂಪೂಣವಾಗಿ ನಾಶ
ಮಾಡಿರಿ; ಯಾರನ್ನೂ ಜೀವಂತ ಉಳಿಸಬೇಡಿ.
ಧಾನ್ಯಗಳ ಗುಡ್ಡೆಗಳ ಹಾಗೆ ಶವಗಳ ದೊಡ್ಡ ದೊಡ್ಡ
ಗುಡ್ಡೆಗಳನ್ನು ಹಾಕಿರಿ.
27 ಬಾಬಿಲೋನಿನ ಎಲ್ಲಾ ತರುಣರನ್ನು ಕೊಂದು
ಹಾಕಿರಿ. ಅವರನ್ನು ಕತ್ತರಿಸಿ ಬಿಡಿ. ಅವರನ್ನು
ಸೋಲಿಸುವ ಸಮಯ ಬಂದಿದೆ. ಇದು ಅವರಿಗೆ
ಕೇಡಿನ ಕಾಲ . ಇದು ಅವರನ್ನು ದಂಡಿಸುವ
ಸಮಯ.
28 ಬಾಬಿಲೋನಿನ ಜನರು ಓಡಿಹೋಗುತ್ತಿದ್ದಾರೆ.
ಅವರು ಆ ದೇಶದಿಂದ ತಪ್ಪಿಸಿಕೊಂಡು ಓಡಿ
ಹೋಗುತ್ತಿದ್ದಾರೆ. ಆ ಜನರು ಚೀಯೋನಿಗೆ
ಬಂದು ಬಾಬಿಲೋನಿನಲ್ಲಿ ಯೆಹೋವನು
ಮಾಡುತ್ತಿದ್ದ ವಿನಾಶದ ಬಗ್ಗೆ ಎಲ್ಲರಿಗೂ ಹೇಳು
ತ್ತಿದ್ದಾರೆ. ಯೆಹೋವನು ಬಾಬಿಲೋನಿಗೆ ತಕ್ಕ
ಶಿಕ್ಷೆಯನ್ನು ಕೊಡುತ್ತಿರುವದರ ಬಗ್ಗೆ ಹೇಳುತ್ತಿ
ದ್ದಾರೆ. ಬಾಬಿಲೋನ್ ಯೆಹೋವನ ಆಲಯ
ವನ್ನು ನಾಶಮಾಡಿತು. ಆದುದರಿಂದ ಈಗ
ಯೆಹೋವನು ಬಾಬಿಲೋನನ್ನು ನಾಶಮಾಡುತ್ತಿ
ದ್ದಾನೆ ಎಂದು ಹೇಳುತ್ತಿದ್ದಾರೆ.
29 ''ಬಾಬಿಲೋನಿನ ಮೇಲೆ ಬಾಣ ಪ್ರಯೋಗ
ಮಾಡಲು ಬಿಲ್ಲುಗಾರರಿಗೆ ಹೇಳಿರಿ. ಆ ಜನರಿಗೆ
ನಗರವನ್ನು ಮುತ್ತಲು ಹೇಳಿರಿ. ಯಾರೂ ತಪ್ಪಿಸಿ
ಕೊಂಡು ಹೋಗದಂತೆ ನೋಡಿಕೊಳ್ಳಿ. ಅದು
ಮಾಡಿದ ದುಷ್ಕೃತ್ಯಗಳಿಗಾಗಿ ಮುಯ್ಯಿತೀರಿಸಿರಿ.
ಬೇರೆ ಜನಾಂಗಗಳಿಗೆ ಅದು ಮಾಡಿದಂತೆ ಅದಕ್ಕೆ
ಮಾಡಿರಿ. ಬಾಬಿಲೋನ್ ಯೆಹೋವನನ್ನು
ಗೌರವಿಸಲಿಲ್ಲ. ಪರಿಶುದ್ಧನಿಗೆ ಅವಮಾನ
ಮಾಡಿದೆ. ಆದುದರಿಂದ ಬಾಬಿಲೋನನ್ನು ಶಿಕ್ಷಿಸ
ಬೇಕು.
30 ''ಬಾಬಿಲೋನಿನ ತರುಣರನ್ನು ಬೀದಿಗಳಲ್ಲಿ ಕೊಲ್ಲ
ಲಾಗುವುದು. ಅದರ ಎಲ್ಲಾ ಸೈನಿಕರು ಅಂದು
ಸಾಯುವರು.'' ಯೆಹೋವನು ಇಂತೆನ್ನುತ್ತಾನೆ:
31 ಬಾಬಿಲೋನೇ, ನೀನು ತುಂಬಾ ದುರಹಂಕಾರಿ.
ನಾನು ನಿನಗೆ ವಿರುದ್ಧವಾಗಿದ್ದೇನೆ.'' ನಮ್ಮ ಒಡೆ
ಯನೂ ಸರ್ವಶಕ್ತನೂ ಆಗಿರುವ ಯೆಹೋವನು
ಇಂತೆನ್ನುತ್ತಾನೆ. ''ನಾನು ನಿನಗೆ ವಿರುದ್ಧವಾಗಿ
ದ್ದೇನೆ. ನಿನ್ನನ್ನು ದಂಡಿಸುವ ಸಮಯ ಬಂದಿದೆ.
32 ದುರಹಂಕಾರಿಯಾದ ಬಾಬಿಲೋನ್ ಎಡವಿ
ಬೀಳುವುದು. ಅದನ್ನು ಎಬ್ಬಿಸಲು ಯಾರೂ
ಸಹಾಯ ಮಾಡುವವದಿಲ್ಲ. ಅದರ ಪಟ್ಟಣಗಳಲ್ಲಿ
ಬೆಂಕಿಯನ್ನು ಹೊತ್ತಿಸುವೆನು. ಆ ಬೆಂಕಿಯು ಅದರ
ಸುತ್ತಮುತ್ತಲಿನ ಎಲ್ಲರನ್ನೂ ಸುಟ್ಟು ಬಿಡುವದು.''
33 ಸರ್ವಶಕ್ತನಾದ ಯೆಹೋವನು ಇಂತೆನ್ನುವನು:
''ಇಸ್ರೇಲಿನ ಮತ್ತು ಯೆಹೂದದ ಜನರು
ಗುಲಾಮರಾಗಿದ್ದಾರೆ. ವೈರಿಯು ಅವರನ್ನು
ಹಿಡಿದುಕೊಂಡಿದ್ದಾನೆ. ಆ ವೈರಿಯು ಇಸ್ರೇಲರನ್ನು
ಹೋಗಬಿಡುವದಿಲ್ಲ. 34 ಆದರೆ ದೇವರು ಅವ
ರನ್ನು ಹಿಂದಕ್ಕೆ ಕರೆತರುವನು. ಆತನ ಹೆಸರು
ಸರ್ವಶಕ್ತನಾದ ಯೆಹೋವನು. ಆತನು ಆ ಜನ
ರನ್ನು ನಿಶ್ಚಯವಾಗಿ ಕಾಪಾಡುವನು. ಭೂಮಿಗೆ
ವಿಶ್ರಾಂತಿಯನ್ನು ಕೊಡುವ ಉದ್ದೇಶದಿಂದ
ಆತನು ಅವರನ್ನು ಕಾಪಾಡುವನು. ಆದರೆ
ಬಾಬಿಲೋನಿನಲ್ಲಿ ವಾಸಿಸುವ ಜನರಿಗೆ ಆತನು
ವಿಶ್ರಾಂತಿಯನ್ನು ಕೊಡುವದಿಲ್ಲ.''
35 ಯೆಹೋವನು ಇಂತೆನ್ನುತ್ತಾನೆ: ''ಖಡ್ಗವೇ,
ಬಾಬಿಲೋನಿನಲ್ಲಿ ವಾಸಮಾಡುತ್ತಿರುವ ಜನರನ್ನು
ನಾಶಮಾಡು! ಖಡ್ಗವೇ, ಬಾಬಿಲೋ ನಿನ
ಅಧಿಕಾರಿಗಳನ್ನು ಮತ್ತು ಪಂಡಿತರನ್ನು ಕೊಂದು
ಹಾಕು!
36 ಖಡ್ಗವೇ, ಬಾಬಿಲೋನಿನ ಯಾಜಕರನ್ನೂ ಸುಳ್ಳು
ಪ್ರವಾದಿಗಳನ್ನೂ ಕೊಲ್ಲು! ಅವರು ಮುರ್ಖ
ರಂತಾಗುವರು. ಖಡ್ಗವೇ, ಬಾಬಿಲೋನಿನ ಸೈನಿಕ
ರನ್ನು ಕೊಲ್ಲು, ಆ ಸೈನಿಕರು ಭಯಭೀತ
ರಾಗಿರುವರು.
37 ಖಡ್ಗವೇ, ಬಾಬಿಲೋನಿನ ಕುದುರೆಗಳನ್ನು ಮತ್ತು
ರಥಗಳನ್ನು ಧ್ವಂಸ ಮಾಡು! ಖಡ್ಗವೇ, ಪರದೇಶ
ಗಳಿಂದ ಕರೆಸಿದ ಸೈನಿಕರನ್ನು ಕೊಂದುಹಾಕು! ಆ
ಸೈನಿಕರು ಹೆದರಿದ ಹೆಂಗಸರಂತಾಗಿರುವರು.
ಖಡ್ಗವೇ, ಬಾಬಿಲೋನಿನ ಭಂಡಾರಗಳನ್ನು ನಾಶ
ಮಾಡು! ಆ ಐಶ್ವರ್ಯವು ಸೂರೆಗೊಳ್ಳುವುದು.
38 ಬಾಬಿಲೋನಿನ ನೀರಿನ ಮೇಲೆ ಒಂದು ಖಡ್ಗ
ಬೀಳಲಿ. ಆ ನೀರು ಬತ್ತಿಹೋಗುವದು. ಬಾಬಿ
ಲೋನ್ ದೇಶದಲ್ಲಿ ಅನೇಕಾನೇಕ ವಿಗ್ರಹಗಳಿವೆ.
ಬಾಬಿಲೋನಿನ ಜನರು ಮೂರ್ಖರೆಂಬುದನ್ನು ಆ
ವಿಗ್ರಹಗಳು ತೋರಿಸುತ್ತವೆ. ಆ ಜನರಿಗೆ ದುರ್ಗತಿ
ಬರುತ್ತದೆ.
39 ''ಬಾಬಿಲೋನಿನಲ್ಲಿ ಪುನಃ ಜನರು ವಾಸಿಸುವದಿಲ್ಲ.
ಕಾಡುನಾಯಿ, ಉಷ್ಟ್ರಪಕ್ಷಿ ಮತ್ತು ಇನ್ನುಳಿದ ಮರು
ಭೂಮಿಯ ಪ್ರಾಣಿಗಳು ಅಲ್ಲಿ ವಾಸಿಸುವವು.

ಆದರೆ ಎಂದೆಂದಿಗೂ ಅಲ್ಲಿ ಮಾನವರು
ವಾಸಿಸುವದಿಲ್ಲ.
40 ದೇವರು ಸೊದೋಮ್ ಗೋಮೋರ ನಗರ
ಗಳನ್ನೂ ಅವುಗಳ ಸುತ್ತಮುತ್ತಲಿನ ಪಟ್ಟಣಗಳನ್ನೂ
ಸಂಪೂರ್ಣವಾಗಿ ನಾಶಮಾಡಿದನು. ಈಗ ಅಲ್ಲಿ
ಯಾರೂ ವಾಸಿಸುವದಿಲ್ಲ. ಅದೇ ರೀತಿ ಬಾಬಿ
ಲೋನಿನಲ್ಲಿ ಯಾರೂ ವಾಸಮಾಡುವದಿಲ್ಲ. ವಾಸ
ಮಾಡಲು ಅಲ್ಲಿಗೆ ಯಾರೂ ಹೋಗುವದಿಲ್ಲ.
41 ‘‘ಇಗೋ, ಉತ್ತರದಿಂದ ಜನರು ಬರುತ್ತಿದ್ದಾರೆ.
ಅವರು ಒಂದು ಪ್ರಬಲ ರಾಷ್ಟ್ರದಿಂದ ಬರುತ್ತಿ
ದ್ದಾರೆ. ಇಡೀ ಜಗತ್ತಿನ ಹಲವಾರು ರಾಜರುಗಳು
ಒಟ್ಟುಗೂಡಿ ಬರುತ್ತಿದ್ದಾರೆ.
42 ಅವರ ಸೈನಿಕರ ಹತ್ತಿರ ಬಿಲ್ಲುಗಳು ಮತ್ತು ಭರ್ಜಿ
ಗಳು ಇವೆ. ಆ ಸೈನಿಕರು ಕ್ರೂರಿಗಳಾಗಿದ್ದಾರೆ.
ಅವರಿಗೆ ದಯೆದಾಕ್ಷಿಣ್ಯ ಇಲ್ಲ. ಆ ಸೈನಿಕರು ತಮ್ಮ
ಕುದುರೆಗಳ ಮೇಲೆ ಬರುತ್ತಿದ್ದಾರೆ. ಅವರ ಧ್ವನಿ
ಆರ್ಭಟಿಸುವ ಸಾಗರದಂತಿದೆ. ಅವರು ಯುದ್ಧಕ್ಕೆ
ಸಿದ್ಧರಾಗಿ ತಮ್ಮತಮ್ಮ ಸ್ಥಳಗಳಲ್ಲಿ ನಿಂತು
ಕೊಂಡಿದ್ದಾರೆ. ಬಾಬಿಲೋನ್ ನಗರವೇ, ಅವರು
ನಿನ್ನ ಮೇಲೆ ಧಾಳಿ ಮಾಡಲು ಸಿದ್ಧರಾಗಿದ್ದಾರೆ.
43 ಬಾಬಿಲೋನಿನ ರಾಜನು ಆ ಸೈನ್ಯಗಳ ಬಗ್ಗೆ ಕೇಳಿ
ಬಹಳ ಗಾಬರಿಗೊಂಡನು; ಹೆದರಿಕೆಯಿಂದ ಅವನ
ಕೈಗಳು ಚಲಿಸದಂತಾಗಿವೆ. ಪ್ರಸವವೇದನೆಯಂತೆ
ಅವನಿಗೆ ವೇದನೆಯಾಗಿದೆ.’’
44 ಯೆಹೋವನು ಇಂತೆನ್ನುತ್ತಾನೆ: ‘‘ಜೋರ್ಡನ್
ನದಿಯ ಸಮೀಪದ ದಟ್ಟವಾದ ಅರಣ್ಯದಿಂದ
ಒಮ್ಮೆ ಒಂದು ಸಿಂಹವು ಬರುವುದು. ಆ ಸಿಂಹವು
ಜನರ ಸಾಕುಪ್ರಾಣಿಗಳಿದ್ದ ಹೊಲಗಳಿಗೆ ನುಗ್ಗು
ವುದು. ಆ ಪಾಣಿಗಳೆಲ್ಲ ಓಡಿಹೋಗುವವು. ನಾನು
ಆ ಸಿಂಹದಂತಾಗುವೆನು. ನಾನು ಬಾಬಿಲೋನನ್ನು
ಅದರ ಪ್ರದೇಶದಿಂದ ಓಡಿಸಿಬಿಡುವೆನು. ಈ
ಕಾರ್ಯ ಮಾಡಲು ನಾನು ಯಾರನ್ನು ಆರಿಸಲಿ?
ನನ್ನಂತೆ ಯಾರೂ ಇಲ್ಲ. ನನ್ನನ್ನು ಪ್ರತಿಭಟಿಸು
ವವರು ಯಾರೂ ಇಲ್ಲ. ಆದುದರಿಂದ ನಾನೇ
ಅದನ್ನು ಮಾಡುತ್ತೇನೆ. ನನ್ನನ್ನು ಓಡಿಸಲು ಯಾವ
ಕುರುಬನೂ ಬರಲಾರನು. ನಾನು ಬಾಬಿಲೋ
ನಿನ ಜನರನ್ನು ಓಡಿಸಿಬಿಡುವೆನು.’’
45 ಯೆಹೋವನು ಬಾಬಿಲೋನಿನ ವಿರುದ್ಧ ಮಾಡ
ಬೇಕೆಂದಿರುವುದನ್ನು ಕೇಳಿರಿ. ಬಾಬಿಲೋನಿನ
ಜನರ ವಿರುದ್ಧ ಯೆಹೋವನು ನಿಶ್ಚಯಿಸಿರುವು
ದನ್ನು ಕೇಳಿರಿ. ಶತ್ರುವು ಬಾಬಿಲೋನಿನ ಕುರಿ
ಮರಿಗಳನ್ನು (ಜನರನ್ನು) ಕೊಂಡೊಯ್ಯುವನು.
ಬಾಬಿಲೋನಿನ ಹುಲ್ಲುಗಾವಲುಗಳು ಸಂಭವಿ
ಸಿದ ನಾಶನಕ್ಕೆ ಬೆದರುವವು.
46 ಬಾಬಿಲೋನ್ ಪತನವಾಗುವುದು. ಆ ಪತನವು
ಭೂಮಂಡಲವನ್ನು ಅಲುಗಾಡಿಸುವುದು. ಎಲ್ಲಾ
ಜನಾಂಗಗಳ ಜನರು ಬಾಬಿಲೋನಿನ ವಿನಾಶದ
ವಿಷಯವನ್ನು ಕೇಳುವರು.

51 ಯೆಹೋವನು ಇಂತೆನ್ನುತ್ತಾನೆ: ‘‘ನಾನು
ಭಯಂಕರವಾದ ಬಿರುಗಾಳಿ ಬೀಸುವಂತೆ
ಮಾಡುವೆನು. ಅದು ಬಾಬಿಲೋನಿನ ಮೇಲೂ
ಬಾಬಿಲೋನಿನ ಜನಗಳ ಮೇಲೂ ಬೀಸುವಂತೆ
ಮಾಡುವೆನು.
2 ಬಾಬಿಲೋನನ್ನು ತೂರುವದಕ್ಕಾಗಿ ನಾನು
ವಿದೇಶಿಯರನ್ನು ಕಳಿಸುವೆನು. ಅವರು ಬಾಬಿ
ಲೋನನ್ನು ತೂರುವರು. ಆ ಜನರು ಬಾಬಿ
ಲೋನನ್ನು ಬರಿದುಗೊಳಿಸುವರು. ಸೈನಿಕರು
ನಗರವನ್ನು ಮುತ್ತುವರು; ಅಪಾರ ವಿನಾಶ
ಸಂಭವಿಸುವದು.
3 ಬಾಬಿಲೋನಿನ ಸೈನಿಕರು ತಮ್ಮ ಬಿಲ್ಲು ಬಾಣ
ಗಳನ್ನು ಉಪಯೋಗಿಸಲಾರರು. ಅವರು ತಮ್ಮ
ಕವಚಗಳನ್ನು ಧರಿಸಲಾರರು. ಬಾಬಿಲೋನಿನ
ಯೋಧರಿಗೆ ಮರುಕ ತೋರಿಸಬೇಡಿ. ಅದರ
ಸೈನ್ಯವನ್ನು ಸಂಪೂರ್ಣವಾಗಿ ನಾಶಮಾಡಿರಿ.
4 ಕಸ್ದೀಯರ ಪ್ರದೇಶದಲ್ಲಿಯೇ ಬಾಬಿಲೋನಿನ
ಸೈನಿಕರನ್ನು ಕೊಲ್ಲಲಾಗುವುದು. ಬಾಬಿಲೋನಿನ
ಬೀದಿಗಳಲ್ಲಿಯೇ ಅವರು ಗಾಯಗೊಳ್ಳುವರು.’’
5 ಸರ್ವಶಕ್ತನಾದ ಯೆಹೋವನು ಇಸ್ರೇಲನ್ನು ಮತ್ತು
ಯೆಹೂದವನ್ನು ವಿಧವೆಯಾಗಿ ಮಾಡಿಲ್ಲ. ಆತನು
ಅವರ ಕೈಬಿಟ್ಟಿಲ್ಲ. ಅವರು ಇಸ್ರೇಲಿನ ಪರಿಶುದ್ಧ
ನನ್ನು ತೊರೆದು ಅಪರಾಧ ಮಾಡಿದರು. ಅವರು
ಆತನನ್ನು ತ್ಯಜಿಸಿದರು. ಆದರೆ ಆತನು ಅವರನ್ನು
ತ್ಯಜಿಸಲಿಲ್ಲ.
6 ಬಾಬಿಲೋನಿನಿಂದ ದೂರ ಓಡಿಹೋಗಿರಿ. ನಿಮ್ಮ
ಪ್ರಾಣಗಳನ್ನು ಉಳಿಸಿಕೊಳ್ಳುವುದಕ್ಕಾಗಿ ಓಡಿ
ಹೋಗಿರಿ. ಇಲ್ಲವಾದರೆ ಬಾಬಿಲೋನಿನ ಪಾಪ
ದಿಂದ ನೀವೂ ಮರಣಕ್ಕೆ ಗುರಿಯಾಗುವಿರಿ.
ಅವರು ಮಾಡಿದ ದುಷ್ಟಕಾರ್ಯಗಳಿಗಾಗಿ
ದೇವರು ಬಾಬಿಲೋನಿನ ಜನರನ್ನು ಶಿಕ್ಷಿಸುವ
ಕಾಲವಿದು. ಅದು ತಕ್ಕ ಶಿಕ್ಷೆಯನ್ನು
ಪಡೆಯುವುದು.
7 ಬಾಬಿಲೋನ್ ಯೆಹೋವನ ಕೈಯಲ್ಲಿನ ಬಂಗಾ
ರದ ಪಾತ್ರೆಯಂತಿತ್ತು. ಲೋಕವೆಲ್ಲವೂ ಮಧ್ಯ
ಪಾನ ಮಾಡುವಂತೆ ಬಾಬಿಲೋನ್ ಮಾಡಿತು.

ಜನಾಂಗಗಳು ಬಾಬಿಲೋನಿನ ದ್ರಾಕ್ಷಾರಸವನ್ನು
ಕುಡಿದು ಹುಚ್ಚಾದವು.
8 ಬಾಬಿಲೋನ್ ಬೀಳುವುದು; ಬೇಗನೆ ಮುರಿದು
ಹೋಗುವುದು. ಅದರ ಸಲುವಾಗಿ ಗೋಳಾಡಿರಿ.
ಅದರ ನೋವಿಗಾಗಿ ಔಷಧಿಯನ್ನು ತೆಗೆದು
ಕೊಂಡು ಬನ್ನಿ, ಒಂದು ವೇಳೆ ಅದು ಗುಣ
ಹೊಂದಬಹುದು.
9 ನಾವು ಬಾಬಿಲೋನನ್ನು ವಾಸಿಮಾಡುವ ಪ್ರಯತ್ನ
ಮಾಡಿದೆವು. ಆದರೆ ಅದನ್ನು ವಾಸಿಮಾಡಲು
ಆಗುವದಿಲ್ಲ. ಆದುದರಿಂದ ಅದನ್ನು ಬಿಟ್ಟು
ಬಿಡೋಣ. ನಾವು ನಮ್ಮನಮ್ಮ ದೇಶಗಳಿಗೆ
ಹೋಗೋಣ. ಪರಲೋಕದ ದೇವರು ಬಾಬಿ
ಲೋನಿಗೆ ವಿಧಿಸಬೇಕಾದ ಶಿಕ್ಷೆಯನ್ನು ನಿರ್ಧರಿಸು
ವನು. ಬಾಬಿಲೋನಿಗೆ ಏನಾಗಬೇಕೆಂಬುದನ್ನು
ಆತನು ನಿರ್ಧರಿಸುವನು.
10 ನಮ್ಮ ಬಗ್ಗೆಯೂ ಯೆಹೋವನು ನಿರ್ಧಾರ
ಕೈಗೊಂಡಿದ್ದಾನೆ. ಬನ್ನಿ, ಅದರ ಬಗ್ಗೆ ನಾವು
ಚೀಯೋನಿನಲ್ಲಿ ಹೇಳೋಣ. ನಮ್ಮ ದೇವರಾದ
ಯೆಹೋವನು ಮಾಡಿದ್ದನ್ನು ನಾವು ಹೇಳೋಣ.
11 ''ನಿಮ್ಮ ಬಾಣಗಳನ್ನು ಚೂಪಾಗಿಸಿರಿ. ನಿಮ್ಮ ಕವಚ
ಗಳನ್ನು ಧರಿಸಿರಿ. ಯೆಹೋವನು ಮೇದ್ಯರ ರಾಜ
ರನ್ನು ಪ್ರಚೋದಿಸಿದ್ದಾನೆ. ಬಾಬಿಲೋನನ್ನು ನಾಶ
ಪಡಿಸಬೇಕೆಂಬ ಉದ್ದೇಶದಿಂದ ಆತನು ಅವರನ್ನು
ಪ್ರಚೋದಿಸಿದ್ದಾನೆ. ಯೆಹೋವನು ಬಾಬಿಲೋ
ನಿನ ಜನರಿಗೆ ತಕ್ಕ ಶಿಕ್ಷೆಯನ್ನು ಕೊಡುತ್ತಾನೆ.
ಬಾಬಿಲೋನಿನ ಸೈನ್ಯವು ಜೆರುಸಲೇಮಿನಲ್ಲಿದ್ದ
ಯೆಹೋವನ ಪವಿತ್ರ ಆಲಯವನ್ನು ನಾಶ
ಮಾಡಿತು. ಆದುದರಿಂದ ಯೆಹೋವನು ಅವರಿಗೆ
ತಕ್ಕ ಶಿಕ್ಷೆಯನ್ನು ಕೊಡುವನು.
12 ಬಾಬಿಲೋನಿನ ಕೋಟೆಗೋಡೆಯ ವಿರುದ್ಧ
ಧ್ವಜವನ್ನು ಎತ್ತಿ ಹಾರಿಸಿರಿ. ಹೆಚ್ಚಿನ ಸಂಖ್ಯೆಯಲ್ಲಿ
ಕಾವಲುಗಾರರನ್ನು ಕರೆದು ತನ್ನಿರಿ. ಯೋಧರನ್ನು
ಅವರವರ ಸ್ಥಾನಗಳಲ್ಲಿ ನಿಲ್ಲಿಸಿರಿ. ಗುಪ್ತವಾಗಿ ದಾಳಿ
ಮಾಡುವುದಕ್ಕೆ ಸಿದ್ಧರಾಗಿರಿ. ಯೆಹೋವನು ತನ್ನ
ಯೋಜನೆಗಳಂತೆ ಕಾರ್ಯ ನೆರವೇರಿಸುವನು.
ಯೆಹೋವನು ಬಾಬಿಲೋನಿನ ಜನರ ವಿರುದ್ಧ
ಹೇಳಿರುವಂತೆಯೇ ಮಾಡುವನು.
13 ಬಾಬಿಲೋನೇ, ನೀನು ಸಮೃದ್ಧವಾದ ನೀರಿನ
ಹತ್ತಿರ ಇರುವೆ. ನೀನು ಸಂಪತ್ತಿನಿಂದ ಸಮೃದ್ಧ
ವಾಗಿರುವೆ. ಆದರೆ ಒಂದು ಜನಾಂಗವಾಗಿ ನೀನು
ಬಹಳ ಕಾಲ ಮುಂದುವರೆಯಲಾರೆ. ನಿನ್ನ ವಿನಾಶ
ಕಾಲ ಸಮೀಪಿಸಿದೆ.
14 ಸರ್ವಶಕ್ತನಾದ ಯೆಹೋವನು ತನ್ನ ಮೇಲೆ ಆಣೆ
ಇಟ್ಟುಕೊಂಡು ಹೀಗೆ ಹೇಳಿದ್ದಾನೆ: ''ಬಾಬಿ
ಲೋನೇ, ನಾನು ಖಂಡಿತವಾಗಿ ನಿನ್ನನ್ನು ವೈರಿ
ಸೈನಿಕರಿಂದ ತುಂಬಿಸಿ ಬಿಡುವೆನು. ಅವರು
ಮಿಡತೆಗಳ ಸಮೂಹದಂತೆ ವ್ಯಾಪಿಸುವರು. ಆ ಸೈನಿ
ಕರು ನಿಮ್ಮ ವಿರುದ್ಧ ಯುದ್ಧದಲ್ಲಿ ಜಯಗಳಿಸು
ವರು. ಅವರು ನಿಮ್ಮ ಮೇಲೆ ನಿಂತುಕೊಂಡು
ಜಯಘೋಷ ಮಾಡುವರು.''
15 ಯೆಹೋವನು ತನ್ನ ಅಪಾರ ಶಕ್ತಿಯಿಂದ ಭೂಮಿ
ಯನ್ನು ಸೃಷ್ಟಿಸಿದನು. ತನ್ನ ಜ್ಞಾನದಿಂದ ಈ ಲೋಕ
ವನ್ನು ನಿರ್ಮಿಸಿದನು. ತನ್ನ ವಿವೇಕದಿಂದ ಆಕಾಶ
ವನ್ನು ಹರಡಿದನು.
16 ಆತನು ಗರ್ಜಿಸಿದಾಗ ಸಮುದ್ರದ ನೀರು
ಭೋರ್ಗರೆಯುತ್ತದೆ. ಆತನು ಇಡೀ ಭೂಮಂಡ
ಲದಿಂದ ಮೋಡಗಳು ಮೇಲೆ ಹೋಗುವಂತೆ
ಮಾಡುತ್ತಾನೆ. ಆತನು ಮಳೆಯ ಜೊತೆ ಮಿಂಚನ್ನು
ಕಳುಹಿಸುತ್ತಾನೆ. ತನ್ನ ಭಂಡಾರದಿಂದ ಗಾಳಿ
ಯನ್ನು ಹೊರಗೆ ಬಿಡುತ್ತಾನೆ.
17 ಆದರೆ ಜನರು ಬುದ್ಧಿಹೀನರಾಗಿದ್ದಾರೆ. ದೇವರ
ಕಾರ್ಯವನ್ನು ತಿಳಿಯದವರಾಗಿದ್ದಾರೆ. ಕುಶಲ
ಕೆಲಸಗಾರರು ಸುಳ್ಳುದೇವರುಗಳ ವಿಗ್ರಹಗಳನ್ನು
ಮಾಡುತ್ತಾರೆ. ಆ ವಿಗ್ರಹಗಳು ಕೇವಲ ಸುಳ್ಳು
ದೇವತೆಗಳೇ. ಆ ಕೆಲಸಗಾರರು ಎಷ್ಟು ಮೂರ್ಖ
ರೆಂಬುದನ್ನು ಅವು ತೋರಿಸುತ್ತವೆ. ಆ ವಿಗ್ರಹಗಳು
ಜೀವಂತವಾಗಿರುವದಿಲ್ಲ.
18 ಆ ಪ್ರತಿಮೆಗಳು ನಿಷ್ಪ್ರಯೋಜಕವಾದವುಗಳೇ. ಆ
ವಿಗ್ರಹಗಳನ್ನು ಮಾಡಿದವರು ಜನರೇ. ಅವುಗಳು
ಕೇವಲ ಹಾಸ್ಯಾಸ್ಪದ ವಸ್ತುಗಳಲ್ಲದೆ ಮತ್ತೇನೂ
ಅಲ್ಲ. ಅವುಗಳ ಬಗ್ಗೆ ತೀರ್ಪುಕೊಡುವ ಕಾಲ
ಬರುವದು; ಆ ವಿಗ್ರಹಗಳನ್ನು ನಾಶಮಾಡ
ಲಾಗುವುದು.
19 ಆದರೆ ಯಾಕೋಬ್ಯರ ಸ್ವಾಸ್ತ್ಯವಾದಾತನು ಆ
ನಿಷ್ಪ್ರಯೋಜಕ ವಿಗ್ರಹಗಳಂತಲ್ಲ. ಜನರು ದೇವ
ರನ್ನು ಸೃಷ್ಟಿಸಲಿಲ್ಲ. ದೇವರು ತನ್ನ ಜನರನ್ನು
ಸೃಷ್ಟಿಸಿದನು. ದೇವರು ಎಲ್ಲವನ್ನು ಸೃಷ್ಟಿಸಿದನು.
ಆತನ ಹೆಸರು ಸರ್ವಶಕ್ತನಾದ ಯೆಹೋವನು.
20 ಯೆಹೋವನು ಇಂತೆನ್ನುತ್ತಾನೆ: ''ಬಾಬಿಲೋನೇ,
ನೀನು ನನ್ನ ಗದೆ. ಜನಾಂಗಗಳನ್ನು ಜಜ್ಜಿಹಾಕಲೂ
ರಾಜ್ಯಗಳನ್ನು ಧ್ವಂಸ ಮಾಡಲೂ ನಾನು ನಿನ್ನನ್ನು
ಬಳಸುತ್ತೇನೆ.
21 ಕುದುರೆಗಳನ್ನೂ ಅದರ ಸವಾರರನ್ನೂ ಜಜ್ಜಿ
ಹಾಕಲು ನಾನು ನಿನ್ನನ್ನು ಬಳಸುತ್ತೇನೆ.

ರಥಗಳನ್ನೂ ಸಾರಥಿಗಳನ್ನೂ ಪುಡಿಪುಡಿ ಮಾಡಲು
ನಾನು ನಿನ್ನನ್ನು ಬಳಸುತ್ತೇನೆ.
22 ಗಂಡಸರನ್ನೂ ಹೆಂಗಸರನ್ನೂ ಸಂಹರಿಸುವದಕ್ಕಾಗಿ
ನಾನು ನಿನ್ನನ್ನು ಬಳಸುತ್ತೇನೆ. ವೃದ್ಧರನ್ನೂ ತರುಣ
ರನ್ನೂ ನಾಶಪಡಿಸಲು ನಾನು ನಿನ್ನನ್ನು ಬಳಸು
ತ್ತೇನೆ. ತರುಣರನ್ನೂ ತರುಣಿಯರನ್ನೂ ಧ್ವಂಸ
ಮಾಡಲು ನಾನು ನಿನ್ನನ್ನು ಬಳಸುತ್ತೇನೆ.
23 ಕುರುಬರನ್ನೂ ಕುರಿಹಿಂಡನ್ನೂ ನಾಶಮಾಡುವದ
ಕ್ಕಾಗಿ ನಾನು ನಿನ್ನನ್ನು ಬಳಸುತ್ತೇನೆ. ರೈತರನ್ನೂ
ಮತ್ತು ಹಸುಗಳನ್ನೂ ಸಂಹರಿಸುವದಕ್ಕಾಗಿ ನಾನು
ನಿನ್ನನ್ನು ಬಳಸುತ್ತೇನೆ. ಅಧಿಪತಿಗಳನ್ನೂ ಪ್ರಮುಖ
ಅಧಿಕಾರಿಗಳನ್ನೂ ನುಚ್ಚುನೂರು ಮಾಡುವದ
ಕ್ಕಾಗಿ ನಾನು ನಿನ್ನನ್ನು ಬಳಸುತ್ತೇನೆ.
24 ಆದರೆ ನಾನು ಬಾಬಿಲೋನಿಗೆ ಮುಯ್ಯಿತೀರಿಸು
ವೆನು. ನಾನು ಬಾಬಿಲೋನಿನ ಎಲ್ಲಾ ಜನರಿಗೆ
ಮುಯ್ಯಿತೀರಿಸುವೆನು. ಅವರು ಚೀಯೋನಿಗೆ
ಮಾಡಿದ ಎಲ್ಲಾ ದುಷ್ಕಾರ್ಯಗಳಿಗಾಗಿ ನಾನು
ಮುಯ್ಯಿತೀರಿಸುವೆನು. ಯೆಹೂದವೇ, ನಿನ್ನ
ಎದುರಿನಲ್ಲಿಯೇ ಅವರಿಗೆ ಮುಯ್ಯಿತೀರಿಸು
ವೆನು.'' ಇದು ಯೆಹೋವನ ನುಡಿ.
25 ಯೆಹೋವನು ಇಂತೆನ್ನುತ್ತಾನೆ: ''ಬಾಬಿಲೋನೇ,
ನೀನೊಂದು ವಿನಾಶಕಾರಿ ಪರ್ವತ. ನಾನು ನಿನ್ನ
ವಿರುದ್ಧವಾಗಿದ್ದೇನೆ. ಬಾಬಿಲೋನೇ ನೀನು ಇಡೀ
ಭೂಮಂಡಲವನ್ನು ನಾಶಮಾಡಿರುವೆ. ನಾನು
ನಿನಗೆ ವಿರೋಧಿಯಾಗಿರುವೆನು. ನಾನು ನಿನ್ನ
ವಿರುದ್ಧ ಕೈಮಾಡುವೆನು. ನಾನು ನಿನ್ನನ್ನು ಜರಿಯ
ಮೇಲಿಂದ ಕೆಳಕ್ಕೆ ಉರುಳಿಸುವೆನು. ನಾನು ನಿನ್ನನ್ನು
ಸುಟ್ಟುಹೋದ ಪರ್ವತವನ್ನಾಗಿ ಮಾಡುವೆನು.
26 ನಿಮ್ಮಿಂದ ಜನರಿಗೆ ಮೂಲೆಗಲ್ಲಾಗುವಷ್ಟು ದೊಡ್ಡ
ಕಲ್ಲು ಸಹ ಸಿಗಲಾರದು. ಜನರು ತಮ್ಮ ಕಟ್ಟಡದ
ಅಸ್ತಿವಾರಕ್ಕಾಗಿ ಒಂದು ಕಲ್ಲು ಬಂಡೆಯನ್ನು
ಬಾಬಿಲೋನಿನಿಂದ ತೆಗೆದುಕೊಂಡು ಹೋಗ
ಲಾರರು. ಏಕೆಂದರೆ ಶಾಶ್ವತವಾಗಿ ನಿಮ್ಮ ನಗರವು
ಒಡೆದ ಕಲ್ಲುಗಳ ಗುಡ್ಡೆಯಾಗುವುದು.''
ಯೆಹೋವನು ಇಂತೆನ್ನುತ್ತಾನೆ:

27 ''ಎಲ್ಲಾ ದೇಶಗಳಲ್ಲಿ ಯುದ್ಧದ ಧ್ವಜವನ್ನು
ಹಾರಿಸಿರಿ. ಎಲ್ಲಾ ರಾಷ್ಟ್ರಗಳಲ್ಲಿ ತುತ್ತೂರಿಗಳನ್ನು
ಊದಿರಿ. ಬಾಬಿಲೋನಿನ ವಿರುದ್ಧ ಹೋರಾ
ಡಲು ಎಲ್ಲಾ ಜನಾಂಗಗಳಿಗೆ ಸಿದ್ಧಗೊಳಿಸಿರಿ.
ಅರರಾಟ್, ಮಿನ್ನಿ, ಅಷ್ಕೆನಜ್ ಎಲ್ಲಾ ರಾಜ್ಯ
ಗಳನ್ನು ಬಾಬಿಲೋನಿನ ವಿರುದ್ಧ ಯುದ್ಧ
ಮಾಡಲು ಕರೆಯಿರಿ. ಸೈನ್ಯದ ಮುಂದಾಳಾಗಿರಲು
ಒಬ್ಬ ಸೇನಾಧಿಪತಿಯನ್ನು ಆರಿಸಿರಿ. ಮಿಡತೆಯ
ದಂಡಿನಂತೆ ಅಪಾರವಾಗಿರುವ ಅಶ್ವಬಲವನ್ನು
ಕಳುಹಿಸಿರಿ.
28 ಅದರ ವಿರುದ್ಧ ಯುದ್ಧಕ್ಕಾಗಿ ಜನಾಂಗಗಳನ್ನು
ಸಿದ್ಧಮಾಡಿರಿ. ಮೇದ್ಯರ ರಾಜರನ್ನು ಸಿದ್ಧಮಾಡಿರಿ.
ಅವರ ಅಧಿಪತಿಗಳನ್ನು ಮತ್ತು ಎಲ್ಲಾ ಮುಖ್ಯ
ಅಧಿಕಾರಿಗಳನ್ನು ಸಿದ್ಧಗೊಳಿಸಿರಿ. ಬಾಬಿಲೋನಿನ
ವಿರುದ್ಧ ಯುದ್ಧ ಮಾಡಲು ಅವರು ಆಳುವ ಎಲ್ಲಾ
ದೇಶಗಳನ್ನು ಸನ್ನದ್ಧಗೊಳಿಸಿರಿ.
29 ನೋವಿನಿಂದಲೊ ಎಂಬಂತೆ ಭೂಮಿಯು ನಡು
ಗುತ್ತದೆ ಮತ್ತು ಹೊರಳಾಡುತ್ತದೆ. ಯೆಹೋವನು
ತಾನು ಯೋಚಿಸಿದಂತೆ ಬಾಬಿಲೋನಿಗೆ ಮಾಡಿ
ದಾಗ ಅದು ನಡುಗುತ್ತದೆ. ಬಾಬಿಲೋನನ್ನು
ಯಾರೂ ವಾಸಮಾಡದ ಮರುಭೂಮಿಯನ್ನಾಗಿ
ಮಾಡಬೇಕೆಂಬುದು ಯೆಹೋವನ ಯೋಜನೆ.
30 ಬಾಬಿಲೋನಿನ ಸೈನಿಕರು ಕಾದಾಡುವದನ್ನು
ನಿಲ್ಲಿಸಿದ್ದಾರೆ. ಅವರು ತಮ್ಮ ಕೋಟೆಗಳಲ್ಲಿದ್ದಾರೆ.
ಅವರ ಬಲ ನಷ್ಟವಾಗಿದೆ. ಅವರು ಭಯಪಟ್ಟ
ಹೆಂಗಸಿನಂತಾಗಿದ್ದಾರೆ. ಬಾಬಿಲೋನಿನ ಮನೆ
ಗಳು ಉರಿಯುತ್ತಿವೆ. ಅದರ ಬಾಗಿಲಿನ ಅಗುಳಿ
ಗಳು ಮುರಿದುಹೋಗಿವೆ.
31 ಒಬ್ಬ ಸಂದೇಶಕನಾದ ಮೇಲೆ ಇನ್ನೊಬ್ಬ ಸಂದೇಶಕ
ಬರುವನು. ಸಂದೇಶಕರ ಮೇಲೆ ಸಂದೇಶಕರು
ಬಂದು, ಇಡೀ ನಗರವನ್ನು ವಶಪಡಿಸಿಕೊಳ್ಳ
ಲಾಗಿದೆ, ಎಂದು ಬಾಬಿಲೋನಿನ ರಾಜನಿಗೆ
ತಿಳಿಸುತ್ತಾರೆ.
32 ಹಾಯ್ಗಡಗಳನ್ನು ವಶಪಡಿಸಿಕೊಂಡಿದ್ದಾರೆ; ಬದಿ
ನೆಲವು ಉರಿಯುತ್ತಿದೆ. ಬಾಬಿಲೋನಿನ ಎಲ್ಲಾ
ಸೈನಿಕರು ಅಂಜಿಕೊಂಡಿದ್ದಾರೆ.''
33 ಇಸ್ರೇಲರ ದೇವರೂ ಸರ್ವಶಕ್ತನೂ ಆಗಿರುವ
ಯೆಹೋವನು ಹೀಗೆನ್ನುವನು: ''ಬಾಬಿಲೋನಿನ
ನಗರವು ಒಂದು ಕಣದಂತೆ ಇದೆ. ಸುಗ್ಗಿಯ ಕಾಲ
ದಲ್ಲಿ ಜನರು ಕಾಳನ್ನು ಹೊಟ್ಟಿನಿಂದ ಬೇರ್ಪಡಿಸು
ವದಕ್ಕಾಗಿ ಅದನ್ನು ಬಡಿಯುತ್ತಾರೆ. ಬಾಬಿಲೋ
ನಿನ ಸುಗ್ಗಿಯ ಕಾಲ (ವಿನಾಶ ಕಾಲ) ಹತ್ತಿರ
ವಾಗುತ್ತಲಿದೆ.
34 ಹಿಂದಿನ ಕಾಲದಲ್ಲಿ, ''ಬಾಬಿಲೋನಿನ ರಾಜನಾದ
ನೆಬೂಕದ್ನೆಚ್ಚರನು ನಮ್ಮನ್ನು ಹಾಳು ಮಾಡಿದನು;
ನಮ್ಮನ್ನು ಹಿಂಸಿಸಿದನು: ನಮ್ಮ ಜನರನ್ನು ಸೆರೆ
ಒಯ್ದನು. ಆಗ ನಾವು ಒಂದು ಬರಿದಾದ ಪಾತ್ರೆ
ಯಂತಾದೆವು. ಅವನು ನಮ್ಮ ಎಲ್ಲಾ ಉತ್ತಮ

ವಸ್ತುಗಳನ್ನು ತೆಗೆದುಕೊಂಡು ಹೋದನು. ತನಗೆ
ತೃಪ್ತಿ ಆಗುವವರೆಗೆ ಎಲ್ಲವನ್ನು ತಿಂದು ತೇಗಿದ
ರಾಕ್ಷಸನಂತಿದ್ದನು. ಅವನು ನಮ್ಮೆಲ್ಲ ಉತ್ಕೃಷ್ಟ
ವಸ್ತುಗಳನ್ನು ಕಿತ್ತುಕೊಂಡು ನಮ್ಮನ್ನು ದೂರ
ಎಸೆದನು.
35 ನಮ್ಮನ್ನು ನೋಯಿಸಲು ಬಾಬಿಲೋನ್ ಭಯಂ
ಕರ ಕೆಲಸವನ್ನು ಮಾಡಿತು. ಈಗ ಬಾಬಿಲೋ
ನಿಗೂ ಅಂಥಾ ಸ್ಥಿತಿ ಬರಲೆಂದು ನನ್ನ ಆಶೆ.''
ಚೀಯೋನ್ ನಿವಾಸಿಗಳು ಹೀಗೆಂದರು: ''ಬಾಬಿ
ಲೋನಿನ ಜನರು ನಮ್ಮ ಜನರನ್ನು ಕೊಲ್ಲುವ
ಪಾಪವನ್ನು ಮಾಡಿದ್ದಾರೆ. ಈಗ ಅವರು ಮಾಡಿದ
ದುಷ್ಕಾರ್ಯಗಳಿಗಾಗಿ ಅವರನ್ನು ಶಿಕ್ಷಿಸ
ಲಾಗುತ್ತಿದೆ'' ಎಂದು ಜೆರುಸಲೇಮ್ ನಗರ
ಹೇಳುವುದು.
36 ಯೆಹೋವನು ಇಂತೆನ್ನುವನು: ''ಯೆಹೂದವೇ,
ನಾನು ನಿನ್ನನ್ನು ರಕ್ಷಿಸುವೆನು. ನಿಶ್ಚಿತವಾಗಿ ಬಾಬಿ
ಲೋನಿಗೆ ಶಿಕ್ಷೆ ಆಗುವಂತೆ ನಾನು ನೋಡಿ
ಕೊಳ್ಳುತ್ತೇನೆ. ನಾನು ಬಾಬಿಲೋನಿನ ಸಮುದ್ರ
ವನ್ನು ಒಣಗಿಸಿಬಿಡುವೆನು. ಆದರ ನೀರಿನ
ಚಿಲುಮೆಗಳು ಬತ್ತುವಂತೆ ಮಾಡುತ್ತೇನೆ.
37 ಬಾಬಿಲೋನು ನಾಶವಾದ ಕಟ್ಟಡಗಳ ಗುಡ್ಡೆ
ಯಾಗುವುದು. ಬಾಬಿಲೋನು ಕಾಡುನಾಯಿಗಳ
ನಿವಾಸವಾಗುವುದು. ಜನರು ಕಲ್ಲುಬಂಡೆಗಳ
ಗುಡ್ಡೆಯನ್ನು ನೋಡಿ ಆಶ್ಚರ್ಯಪಡುವರು.
ಬಾಬಿಲೋನಿನ ಬಗ್ಗೆ ಜನರು ತಲೆಯಾಡಿ
ಸುವರು. ಬಾಬಿಲೋನು ನಿರ್ಜನ ಪ್ರದೇಶ
ವಾಗುವುದು.
38 ''ಬಾಬಿಲೋನಿನ ಜನರು ಗರ್ಜಿಸುವ ಪ್ರಾಯದ
ಸಿಂಹಗಳಂತಿದ್ದಾರೆ. ಅವರು ಮರಿಸಿಂಹಗಳಂತೆ
ಗುರುಗುಟ್ಟುವರು.
39 ಆ ಜನರು ಬಲಶಾಲಿಗಳಾದ ಸಿಂಹಗಳಂತೆ
ವರ್ತಿಸುತ್ತಿದ್ದಾರೆ. ನಾನು ಅವರಿಗೊಂದು ಔತಣ
ವನ್ನೇರ್ಪಡಿಸುವೆನು. ಅವರಿಗೆ ಮತ್ತೇರುವಂತೆ
ಕುಡಿಸುವೆನು. ಅವರು ನಗುನಗುತ್ತಾ ಸಂತೋಷ
ದಿಂದ ಕಾಲ ಕಳೆಯುವರು. ಆಮೇಲೆ ಅವರು
ಶಾಶ್ವತವಾಗಿ ಮಲಗುವರು. ಅವರು ಮತ್ತೆ ಏಳ
ಲಾರರು.'' ಇದು ಯೆಹೋವನ ನುಡಿ.

40 ''ನಾನು ಬಾಬಿಲೋನಿನ ಜನರನ್ನು ವಧೆಗಾಗಿ
ತೆಗೆದುಕೊಂಡು ಹೋಗುವೆನು. ಬಾಬಿಲೋನಿನ
ಗತಿ ವಧೆಗಾಗಿ ತಂದ ಕುರಿ, ಟಗರು ಮತ್ತು
ಹೋತಗಳಂತೆ ಆಗುವುದು.
41 ''ಶೇಷಕನು''* ಶತ್ರುಗಳ ವಶವಾಗುವನು. ಲೋಕ
ದಲ್ಲಿಯೇ ಅತ್ಯುತ್ತಮವಾದ ಮತ್ತು ಹೆಮ್ಮೆಪಡುವ
ದೇಶವು ವೈರಿಗಳ ಕೈವಶವಾಗುವುದು. ಬೇರೆ
ಜನಾಂಗದ ಜನರು ಬಾಬಿಲೋನಿನ ಕಡೆಗೆ
ನೋಡಿದಾಗ ಅಲ್ಲಿನ ಸ್ಥಿತಿಗತಿಗಳನ್ನು ಕಂಡು
ಭಯಪಡುವರು.
42 ಸಾಗರವು ಬಾಬಿಲೋನಿನ ಮೇಲೆ ನುಗ್ಗುವುದು.
ಅದರ ಆರ್ಭಟಿಸುವ ತೆರೆಗಳು ಅದನ್ನು ಮುಚ್ಚಿ
ಬಿಡುವವು.
43 ಬಾಬಿಲೋನಿನ ಪಟ್ಟಣಗಳು ಬರಿದಾದ ಊರುಗ
ಳಾಗುವವು. ಬಾಬಿಲೋನು ಮರುಭೂಮಿಯಾ
ಗುವುದು. ಅದು ನಿರ್ಜನವಾದ ನೆಲವಾಗುವುದು.
ಜನರು ಬಾಬಿಲೋನಿನ ಮೂಲಕ ಪ್ರಯಾಣ
ಮಾಡಲಾಗದು.
44 ನಾನು ಬಾಬಿಲೊನಿನ ಬೇಲ್ ದೇವರನ್ನು
ದಂಡಿಸುವೆನು. ಅವನು ನುಂಗಿದ ಜನರನ್ನು
ಅವನು ಕಕ್ಕುವಂತೆ ಮಾಡುವೆನು. ಬೇರೆ ಜನಾಂಗ
ಗಳು ಬಾಬಿಲೋನಿಗೆ ಬರಲಾರವು. ಬಾಬಿಲೋ
ನಿನ ಸುತ್ತಲಿನ ಗೋಡೆಯು ಬೀಳುವುದು.
45 ನನ್ನ ಜನರೇ, ಬಾಬಿಲೋನ್ ನಗರದಿಂದ
ಹೊರಗೆ ಬನ್ನಿ. ನಿಮ್ಮ ಪ್ರಾಣಗಳನ್ನು ಉಳಿಸಿ
ಕೊಳ್ಳಲು ಓಡಿಹೋಗಿರಿ. ಯೆಹೋವನ
ಭಯಂಕರ ಕೋಪದಿಂದ ತಪ್ಪಿಸಿಕೊಳ್ಳಲು ಓಡಿ
ಹೋಗಿರಿ.

46 ''ನನ್ನ ಜನರೇ, ದುಃಖಿಸಬೇಡಿ, ವದಂತಿಗಳು
ಹಬ್ಬುತ್ತವೆ. ಆದರೆ ಹೆದರಬೇಡಿ. ಒಂದು ವದಂತಿ
ಈ ವರ್ಷ ಬರುವುದು. ಮುಂದಿನ ವರ್ಷ
ಮತ್ತೊಂದು ವದಂತಿ ಬರಬಹುದು. ದೇಶದಲ್ಲಿ
ಭಯಂಕರವಾದ ಯುದ್ಧದ ಬಗ್ಗೆ ವದಂತಿಗಳು
ಕೇಳಿಬರುವವು. ರಾಜರುಗಳು ಬೇರೆ ರಾಜರುಗ
ಳೊಂದಿಗೆ ಯುದ್ಧ ಮಾಡುತ್ತಿರುವ ವದಂತಿಗಳು
ಕೇಳಿಬರುವವು.
47 ನಾನು ಬಾಬಿಲೋನಿನ ಸುಳ್ಳು ದೇವತೆಗಳನ್ನು
ದಂಡಿಸುವ ಸಮಯ ಖಂಡಿತವಾಗಿ ಬರುವುದು.
ಬಾಬಿಲೋನಿನ ಇಡೀ ಪ್ರದೇಶವು
ನಾಚಿಕೆಪಡುವುದು. ನಗರದ ಬೀದಿಗಳಲ್ಲಿ
ಅನೇಕಾನೇಕ ಶವಗಳು ಬಿದ್ದಿರುವವು.
48 ಆಗ ಭೂಮ್ಯಾಕಾಶಗಳು ಮತ್ತು ಅವುಗಳಲ್ಲಿರುವ
ಸಮಸ್ತ ವಸ್ತುಗಳು ಬಾಬಿಲೋನಿನ ಬಗ್ಗೆ
ಹರ್ಷಧ್ವನಿ ಮಾಡುವವು. ಏಕೆಂದರೆ ಸೈನ್ಯವು

---

**ಶೇಷಕ** ಬಾಬಿಲೋನಿನ ರಹಸ್ಯವಾದ ಹೆಸರು.

ಉತ್ತರದಿಂದ ಬಂದಿತು, ಬಾಬಿಲೋನಿನ ವಿರುದ್ಧ
ಯುದ್ಧ ಮಾಡಿತು'' ಇದು ಯೆಹೋವನ ನುಡಿ.
49 ''ಬಾಬಿಲೋನ್ ಇಸ್ರೇಲರನ್ನು ಕೊಂದಿತು. ಬಾಬಿ
ಲೋನ್ ಭೂಮಂಡಲದ ಎಲ್ಲೆಡೆಯ ಜನರನ್ನು
ಕೊಂದಿತು. ಆದಕ್ಕಾಗಿ ಬಾಬಿಲೋನ್ ಪತನ
ವಾಗಲೇಬೇಕು.
50 ನೀವು ಖಡ್ಗಗಳಿಂದ ತಪ್ಪಿಸಿಕೊಂಡಿರಿ. ನೀವು
ಅವಸರಮಾಡಿ ಬಾಬಿಲೋನನ್ನು ಬಿಡಬೇಕು.
ತಡೆಯಬೇಡಿ, ನೀವು ಬಹಳ ದೂರಪ್ರದೇಶದಲ್ಲಿ
ಇದ್ದೀರಿ. ಆದರೆ ನೀವು ಇರುವಲ್ಲಿಯೇ
ಯೆಹೋವನನ್ನು ಸ್ಮರಿಸಿರಿ; ಜೆರುಸಲೇಮನ್ನೂ
ಸ್ಮರಿಸಿಕೊಳ್ಳಿರಿ.
51 ''ಯೆಹೂದದ ಜನರಾದ ನಾವು ನಾಚಿಕೆಪಟ್ಟೆವು.
ಜನರು ನಮ್ಮನ್ನು ಅಪಮಾನಗೊಳಿಸಿದ್ದರಿಂದ
ನಾವು ನಾಚಿಕೆಪಟ್ಟಿದ್ದೇವೆ. ಏಕೆಂದರೆ ಯೆಹೋವನ
ಆಲಯದ ಪವಿತ್ರ ಸ್ಥಳಗಳಲ್ಲಿ ಅಪರಿಚಿತರು
ಪ್ರವೇಶಗೈದಿದ್ದಾರೆ.''
52 ಯೆಹೋವನು ಇಂತೆನ್ನುವನು: ''ಬಾಬಿಲೋನಿನ
ವಿಗ್ರಹಗಳನ್ನು ನಾನು ದಂಡಿಸುವ ಕಾಲ ಬರುತ್ತಿದೆ.
ಆಗ ಆ ದೇಶದಲ್ಲೆಲ್ಲಾ ಗಾಯಗೊಂಡ ಜನರು
ನೋವಿನಿಂದ ಗೋಳಾಡುವರು.
53 ಬಾಬಿಲೋನ್ ನಗರವು ಗಗನ ಚುಂಬಿಯಾಗಿ
ಬೆಳೆಯಬಹುದು. ಅದು ತನ್ನ ಕೋಟೆಗಳನ್ನು
ಭದ್ರಪಡಿಸಿಕೊಳ್ಳಬಹುದು. ಆದರೆ ಆ ನಗರದ
ವಿರುದ್ಧ ಯುದ್ಧ ಮಾಡಲು ನಾನು ಜನರನ್ನು
ಕಳುಹಿಸುತ್ತೇನೆ. ಆ ಜನರು ಅದನ್ನು ನಾಶ
ಮಾಡುವರು.'' ಇದು ಯೆಹೋವನ ನುಡಿ.
54 ''ಬಾಬಿಲೋನಿನಲ್ಲಿ ಜನರು ರೋಧಿಸುವದನ್ನು
ನಾವು ಕೇಳುವೆವು. ಬಾಬಿಲೋನ್ ಪ್ರದೇಶದಲ್ಲಿ
ವಸ್ತುಗಳನ್ನು ನಾಶಮಾಡುವ ಜನರ ಧ್ವನಿಯನ್ನು
ನಾವು ಕೇಳುವೆವು.
55 ಯೆಹೋವನು ಬಾಬಿಲೋನನ್ನು ಬಹುಬೇಗನೆ
ನಾಶಮಾಡುವನು. ಆ ನಗರದ ದೊಡ್ಡ ಧ್ವನಿಗಳು
ಶಾಂತವಾಗುವಂತೆ ಆತನು ಮಾಡುವನು. ವೈರಿ
ಗಳು ಸಾಗರದ ತರಂಗ ಮಾಲೆಗಳಂತೆ ಗರ್ಜಿಸುತ್ತಾ
ಬರುವರು. ಸುತ್ತಮುತ್ತಲಿನ ಜನರೆಲ್ಲರು ಆ
ಗರ್ಜನೆಯನ್ನು ಕೇಳುವರು.
56 ಸೈನ್ಯವು ಬಂದು ಬಾಬಿಲೋನನ್ನು ನಾಶಮಾಡು
ವುದು. ಬಾಬಿಲೋನಿನ ಸೈನಿಕರನ್ನು ವಶಪಡಿಸಿ
ಕೊಳ್ಳಲಾಗುವುದು. ಅವರ ಬಿಲ್ಲುಗಳನ್ನು ಮುರಿ
ಯಲಾಗುವುದು. ಏಕೆಂದರೆ ಯೆಹೋವನು
ಜನರನ್ನು ಅವರು ಮಾಡುವ ದುಷ್ಕೃತ್ಯಗಳಿಗಾಗಿ
ಶಿಕ್ಷಿಸುತ್ತಾನೆ. ಯೆಹೋವನು ಅವರಿಗೆ ತಕ್ಕ
ಶಿಕ್ಷೆಯನ್ನು ಸಂಪೂರ್ಣವಾಗಿ ಕೊಡುತ್ತಾನೆ.
57 ಬಾಬಿಲೋನಿನ ಮುಖ್ಯ ಅಧಿಕಾರಿಗಳಿಗೂ
ಪಂಡಿತರಿಗೂ ದ್ರಾಕ್ಷಾರಸ ಕುಡಿಯುವಂತೆ
ಮಾಡುತ್ತೇನೆ. ಅಲ್ಲಿಯ ಅಧಿಪತಿಗಳಿಗೂ
ಅಧಿಕಾರಿಗಳಿಗೂ ಸೈನಿಕರಿಗೂ ದ್ರಾಕ್ಷಾರಸ ಕುಡಿ
ಸುತ್ತೇನೆ. ಆಮೇಲೆ ಅವರು ಶಾಶ್ವತವಾಗಿ ಮಲಗಿ
ಬಿಡುತ್ತಾರೆ. ಅವರು ಎಚ್ಚರಗೊಳ್ಳುವುದೇ ಇಲ್ಲ.''
ಸರ್ವಶಕ್ತನಾದ ಯೆಹೋವನೆಂಬ ನಾಮಧೇ
ಯದ ರಾಜಾಧಿರಾಜನ ನುಡಿಯಿದು.
58 ಸರ್ವಶಕ್ತನಾದ ಯೆಹೋವನು ಇಂತೆನ್ನುವನು:
''ಬಾಬಿಲೋನಿನ ಅಗಲವಾದ ಮತ್ತು ಸುಭದ್ರ
ವಾದ ಗೋಡೆಯನ್ನು ಬೀಳಿಸಲಾಗುವುದು. ಅದರ
ಎತ್ತರವಾದ ಬಾಗಿಲುಗಳನ್ನು ಸುಟ್ಟುಹಾಕ
ಲಾಗುವುದು. ಬಾಬಿಲೋನಿನ ಜನರು ನಗರ
ವನ್ನು ರಕ್ಷಿಸಲು ಬಹಳ ಕಷ್ಟಪಡುವರು. ಆದರೆ
ಅದು ನಿಷ್ಪ್ರಯೋಜಕವಾಗುವುದು. ನಗರವನ್ನು
ರಕ್ಷಿಸುವ ಪ್ರಯತ್ನದಲ್ಲಿ ಅವರು ತುಂಬಾ ಶ್ರಮ
ವಹಿಸುವರು. ಆದರೆ ಅವರು ಕೇವಲ ಅಗ್ನಿಗೆ
ಆಹುತಿಯಾಗುವರು.''

### ಬಾಬಿಲೋನಿಗೆ ಯೆರೆಮೀಯನ ಸಂದೇಶ

59 ಯೆರೆಮೀಯನು ಸೆರಾಯ ಎಂಬ ಅಧಿಕಾರಿಯ ಕೈಗೆ
ಕೊಟ್ಟ ಸಂದೇಶವಿದು. ಸೆರಾಯನು ಯೆಹೂದದ
ನೇರೀಯನ ಮಗ. ನೇರೀಯನು ಮಹ್ಸೇಯನ ಮಗನು.
ಸೆರಾಯನು ಯೆಹೂದದ ರಾಜನಾದ ಚಿದ್ಕೀಯನ
ಜೊತೆಗೆ ಬಾಬಿಲೋನಿಗೆ ಹೋದನು. ಈ ಸಂಗತಿ
ಯೆಹೂದದಲ್ಲಿ ಚಿದ್ಕೀಯನ ಆಳ್ವಿಕೆಯ ನಾಲ್ಕನೇ ವರ್ಷ
ದಲ್ಲಿ ನಡೆದದ್ದು. ಆ ಸಮಯದಲ್ಲಿ ಯೆರೆಮೀಯನು
ಸೆರಾಯನೆಂಬ ಅಧಿಕಾರಿಯ ಕೈಗೆ ಈ ಸಂದೇಶವನ್ನು
ಕೊಟ್ಟನು. 60 ಬಾಬಿಲೋನಿಗೆ ಉಂಟಾಗುವ ಎಲ್ಲಾ
ಕೇಡನ್ನು ಯೆರೆಮೀಯನು ಒಂದು ಸುರಳಿಯಲ್ಲಿ ಬರೆದಿ
ದ್ದನು. ಅವನು ಬಾಬಿಲೋನಿನ ಬಗ್ಗೆ ಈ ವಿಷಯಗಳನ್ನೆಲ್ಲ
ಬರೆದಿದ್ದನು.

61 ಯೆರೆಮೀಯನು ಸೆರಾಯನಿಗೆ ಹೀಗೆ ಹೇಳಿದನು:
''ಸೇರಾಯನೇ, ಬಾಬಿಲೋನಿಗೆ ಹೋಗು. ಎಲ್ಲರಿಗೂ
ಕೇಳಿಸುವಂತೆ ಈ ಸಂದೇಶವನ್ನು ಖಂಡಿತವಾಗಿ ಓದು.
62 ಆಮೇಲೆ ಹೀಗೆ ಹೇಳು: 'ಯೆಹೋವನೇ, ಬಾಬಿ
ಲೋನ್ ನಗರವನ್ನು ನಾಶಮಾಡುವೆನೆಂದು ನೀನು
ಹೇಳಿರುವೆ. ಪ್ರಾಣಿಗಳು ಅಥವಾ ಮನುಷ್ಯರು ಯಾರೂ
ಇಲ್ಲಿ ವಾಸಮಾಡದಂತೆ, ಇದು ಎಂದೆಂದಿಗೂ ಹಾಳುಬಿದ್ದ
ಸ್ಥಳವಾಗಿರುವಂತೆ ಇದನ್ನು ನಾಶಮಾಡುವದಾಗಿ ಹೇಳಿ

ರುವೆ.’ 63ಈ ಸುರುಳಿಯನ್ನು ಓದಿ ಮುಗಿಸಿದ ಮೇಲೆ
ಅದಕ್ಕೊಂದು ಕಲ್ಲನ್ನು ಕಟ್ಟಿ ಆ ಕಾಗದದ ಸುರುಳಿಯನ್ನು
ಯೂಫ್ರೇಟೀಸ್ ನದಿಯಲ್ಲಿ ಎಸೆದುಬಿಡು. 64ಆಮೇಲೆ
‘ಇದೇ ರೀತಿಯಲ್ಲಿ ಬಾಬಿಲೋನ್ ಕೂಡ ಮುಳುಗಿ
ಹೋಗುವುದು. ಬಾಬಿಲೋನ್ ಎಂದಿಗೂ ಮೇಲಕ್ಕೆ
ಏಳುವದಿಲ್ಲ. ಅಲ್ಲಿ ನಾನು ಬರಮಾಡುವ ಅನೇಕ ವಿಪತ್ತು
ಗಳಿಂದಾಗಿ ಬಾಬಿಲೋನ್ ಮುಳುಗಿ ಹೋಗುವುದು’’’
ಎಂದು ಹೇಳು. ಯೆರೆಮೀಯನ ಸಂದೇಶ ಇಲ್ಲಿಗೆ
ಮುಗಿಯುತ್ತದೆ.

### ಜೆರುಸಲೇಮಿನ ಪತನ

52 ಚಿದ್ಕೀಯನು ಯೆಹೂದದ ರಾಜನಾದಾಗ ಇಪ್ಪ
ತ್ತೊಂದು ವರ್ಷದವನಾಗಿದ್ದನು. ಚಿದ್ಕೀಯನು
ಜೆರುಸಲೇಮಿನಲ್ಲಿ ಹನ್ನೊಂದು ವರ್ಷ ಆಳಿದನು. ಅವನ
ತಾಯಿಯ ಹೆಸರು ಹಮೂಟಲ್. ಈಕೆ ಯೆರೆಮೀ
ಯನ* ಮಗಳು. ಹಮೂಟಲಳ ಮನೆತನದವರು ಲಿಬ್ನ
ಪಟ್ಟಣದ ನಿವಾಸಿಗಳಾಗಿದ್ದರು. 2ರಾಜನಾದ ಯೆಹೂ
ಯಾಕೀಮನು ಮಾಡಿದಂತೆ ಚಿದ್ಕೀಯನು ದುಷ್ಕೃತ್ಯ
ಗಳನ್ನು ಮಾಡಿದನು. ಚಿದ್ಕೀಯನು ಆ ದುಷ್ಟಕಾರ್ಯ
ಗಳನ್ನು ಮಾಡಿದ್ದು ಯೆಹೋವನಿಗೆ ಒಪ್ಪಿಗೆಯಾಗಲಿಲ್ಲ.
3ಯೆಹೋವನಿಗೆ ಅವರ ಮೇಲೆ ಕೋಪ ಬಂದುದರಿಂದ
ಜೆರುಸಲೇಮ್ ಮತ್ತು ಯೆಹೂದಗಳಿಗೆ ವಿಪತ್ತುಗಳು
ಸಂಭವಿಸಿದವು. ಕೊನೆಗೆ, ಯೆಹೋವನು ಜೆರುಸಲೇಮ್
ಮತ್ತು ಯೆಹೂದದ ಜನರನ್ನು ತನ್ನಿಂದ ದೂರ ಎಸೆದು
ಬಿಟ್ಟನು.

ಚಿದ್ಕೀಯನು ಬಾಬಿಲೋನ್ ರಾಜನ ವಿರೋಧ ದಂಗೆ
ಎದ್ದನು. 4ಆದುದರಿಂದ ಚಿದ್ಕೀಯನು ತನ್ನ ಆಳ್ವಿಕೆಯ
ಒಂಭತ್ತನೆಯ ವರ್ಷದ ಹತ್ತನೆಯ ತಿಂಗಳಿನ ಹತ್ತನೆಯ
ದಿನ* ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರನು
ಜೆರುಸಲೇಮಿನ ವಿರುದ್ಧ ದಂಡಯಾತ್ರೆ ಕೈಗೊಂಡನು.
ನೆಬೂಕದ್ನೆಚ್ಚರನ ಸಂಗಡ ಅವನ ಇಡೀ ಸೈನ್ಯವಿತ್ತು.
ಬಾಬಿಲೋನ್ ಸೈನ್ಯವು ಜೆರುಸಲೇಮಿನ ಹೊರ
ಭಾಗದಲ್ಲಿ ಬೀಡುಬಿಟ್ಟಿತು. ಆ ನಗರವನ್ನು ಹತ್ತಲು
ಅನುಕೂಲವಾಗುವಂತೆ ಅವರು ನಗರದ ಪೌಳಿಗೋಡೆಗೆ
ಅಲ್ಲಲ್ಲಿ ಇಳಿಜಾರಾದ ಗೋಡೆಗಳನ್ನು ಕಟ್ಟಿದ್ದರು.
5ಚಿದ್ಕೀಯನ ಆಳ್ವಿಕೆಯ ಹನ್ನೊಂದನೇ ವರ್ಷದವರೆಗೆ
ಬಾಬಿಲೋನಿನ ಸೈನ್ಯವು ಜೆರುಸಲೇಮ್ ನಗರವನ್ನು
ಮುತ್ತಿಗೆ ಹಾಕಿತ್ತು. 6ಆ ವರ್ಷದ ನಾಲ್ಕನೆ ತಿಂಗಳಿನ
ಒಂಭತ್ತನೆ ದಿನದವರೆಗೆ ಆ ನಗರದಲ್ಲಿ ಹಸಿವಿನ ಹಾವಳಿ
ತುಂಬ ಹೆಚ್ಚಾಗಿತ್ತು. ಆ ನಗರದಲ್ಲಿ ಜನರಿಗೆ ತಿನ್ನಲು
ಆಹಾರವೇ ಇರಲಿಲ್ಲ. 7ಆ ದಿನ ಬಾಬಿಲೋನಿನ ಸೈನ್ಯವು
ಜೆರುಸಲೇಮಿನಲ್ಲಿ ನುಗ್ಗಿತ್ತು. ಜೆರುಸಲೇಮಿನ ಸೈನಿಕರು
ಓಡಿಹೋದರು. ಅವರು ರಾತ್ರಿಯ ಸಮಯದಲ್ಲಿ ಎರಡು
ಗೋಡೆಗಳ ಮಧ್ಯದ ಬಾಗಿಲಿನಿಂದ ನಗರದಿಂದ ಓಡಿ
ಹೋದರು. ಆ ಬಾಗಿಲು ರಾಜನ ಉದ್ಯಾನವನದ ಹತ್ತಿರ
ಇತ್ತು. ಬಾಬಿಲೋನಿನ ಸೈನಿಕರು ಜೆರುಸಲೇಮ್
ನಗರವನ್ನು ಮುತ್ತಿದ್ದರೂ ಜೆರುಸಲೇಮಿನ ಸೈನಿಕರು,
ಮರುಭೂಮಿಯ ಕಡೆಗೆ ಓಡಿಹೋದರು.

8ಬಾಬಿಲೋನಿನ ಸೈನಿಕರು ರಾಜನಾದ ಚಿದ್ಕೀಯ
ನನ್ನು ಬೆನ್ನಟ್ಟಿದರು. ಅವರು ಅವನನ್ನು ಯೆರಿಕೋವಿನ
ಬಯಲಿನಲ್ಲಿ ಹಿಡಿದರು. ಚಿದ್ಕೀಯನ ಎಲ್ಲಾ ಸೈನಿಕರು
ಓಡಿಹೋದರು. 9ಬಾಬಿಲೋನಿನ ಸೈನಿಕರು ರಾಜನಾದ
ಚಿದ್ಕೀಯನನ್ನು ಬಂಧಿಸಿ ಅವನನ್ನು ರಿಬ್ಲದಲ್ಲಿದ್ದ ತಮ್ಮ
ರಾಜನ ಬಳಿಗೆ ಹಿಡಿದುಕೊಂಡು ಹೋದರು. ರಿಬ್ಲವು
ಹಮಾತ್ ಪ್ರದೇಶದಲ್ಲಿದೆ. ರಿಬ್ಲದಲ್ಲಿ ಬಾಬಿಲೋನಿನ
ರಾಜನು ಚಿದ್ಕೀಯನ ಬಗ್ಗೆ ತನ್ನ ತೀರ್ಪನ್ನು ಪ್ರಕಟ
ಪಡಿಸಿದನು. 10ರಿಬ್ಲ ನಗರದಲ್ಲಿ ಬಾಬೆಲಿನ ರಾಜನು
ಚಿದ್ಕೀಯನ ಮಕ್ಕಳನ್ನು ಸಂಹರಿಸಿದನು. ಚಿದ್ಕೀಯನು
ತನ್ನ ಮಕ್ಕಳ ಕೊಲೆಯನ್ನು ಕಣ್ಣಾರೆ ನೋಡುವಂತೆ ಮಾಡ
ಲಾಯಿತು. ಬಾಬಿಲೋನಿನ ರಾಜನು ಯೆಹೂದದ
ರಾಜನ ಎಲ್ಲಾ ಅಧಿಕಾರಿಗಳನ್ನು ಸಹ ಕೊಲ್ಲಿಸಿದನು.
11ತರುವಾಯ ಬಾಬಿಲೋನಿನ ರಾಜನು ಚಿದ್ಕೀಯನ
ಕಣ್ಣುಗಳನ್ನು ಸಹ ಕೀಳಿಸಿದನು. ಅವನಿಗೆ ಕಂಚಿನ
ಸರಪಳಿಗಳನ್ನು ಬಿಗಿಸಿದನು. ಆಮೇಲೆ ಚಿದ್ಕೀಯನನ್ನು
ಬಾಬಿಲೋನಿಗೆ ತೆಗೆದುಕೊಂಡು ಹೋದನು. ಬಾಬಿ
ಲೋನಿನಲ್ಲಿ ಚಿದ್ಕೀಯನನ್ನು ಸೆರೆಮನೆಯಲ್ಲಿ ಇಟ್ಟನು.
ಚಿದ್ಕೀಯನು ಸಾಯುವವರೆಗೆ ಸೆರೆಮನೆಯಲ್ಲಿದ್ದನು.

12ನೆಬೂಕದ್ನೆಚ್ಚರನ ಆಳ್ವಿಕೆಯ ಹತ್ತೊಂಭತ್ತನೆ ವರ್ಷದ
ಐದನೆ ತಿಂಗಳಿನ ಹತ್ತನೆ ದಿನ ಬಾಬಿಲೋನಿನ ವಿಶೇಷ
ರಕ್ಷಕದಳದ ಅಧಿಪತಿಯಾದ ನೆಬೂಜರದಾನನು ಜೆರುಸ
ಲೇಮಿಗೆ ಬಂದನು. ನೆಬೂಜರದಾನನು ಬಾಬಿಲೋನಿನ
ಒಬ್ಬ ಪ್ರಮುಖ ವ್ಯಕ್ತಿಯಾಗಿದ್ದನು. 13ನೆಬೂಜರದಾನನು
ಯೆಹೋವನ ಆಲಯವನ್ನು ಸುಟ್ಟನು. ಅವನು ಜೆರುಸ
ಲೇಮಿನಲ್ಲಿದ್ದ ಅರಮನೆಯನ್ನು ಮತ್ತು ಉಳಿದೆಲ್ಲ ಮನೆ
ಗಳನ್ನು ಸುಟ್ಟುಬಿಟ್ಟನು. ಅವನು ಜೆರುಸಲೇಮಿನ ಎಲ್ಲಾ
ಮುಖ್ಯ ಕಟ್ಟಡಗಳನ್ನು ಸುಟ್ಟುಹಾಕಿದನು. 14ಬಾಬಿಲೋ
ನಿನ ಇಡೀ ಸೈನ್ಯವು ಜೆರುಸಲೇಮಿನ ಪೌಳಿಗೋಡೆಯನ್ನು
ಒಡೆದುಹಾಕಿತು. ಆ ಸೈನ್ಯವು ರಾಜನ ವಿಶೇಷ ರಕ್ಷಕ ದಳದ
ಅಧಿಪತಿಯ ಅಧೀನದಲ್ಲಿತ್ತು. 15ಸೇನಾಧಿಪತಿಯಾದ

---

**ಯೆರೆಮೀಯ** ಇವನು ಯೆರೆಮೀಯ ಪ್ರವಾದಿಯಲ್ಲ. ಆದೇ ಹೆಸರಿನ ಬೇರೆಯವನು.

**ಹತ್ತನೆಯ ದಿನ.** 9ನೇ ವರ್ಷದ 10ನೇ ತಿಂಗಳಿನ 10ನೇ ದಿನ ಕ್ರಿ.ಪೂ. 588 ಜನವರಿ ತಿಂಗಳು.

ನೆಬೂಜರದಾನನು ಜೆರುಸಲೇಮಿನಲ್ಲಿ ಇನ್ನೂ ಉಳಿದು
ಕೊಂಡಿದ್ದ ಜನರನ್ನು ಬಂಧಿಗಳನ್ನಾಗಿ ಮಾಡಿಕೊಂಡನು.
ಈ ಮುಂಚೆ ಬಾಬಿಲೋನಿನ ರಾಜನಿಗೆ ಶರಣಾಗತ
ರಾದವರನ್ನು ಸಹ ಅವನು ತೆಗೆದುಕೊಂಡು ಹೋದನು.
ಜೆರುಸಲೇಮಿನಲ್ಲಿ ಉಳಿದ ಕುಶಲಕರ್ಮಿಗಳನ್ನು ಸಹ
ಅವನು ತೆಗೆದುಕೊಂಡು ಹೋದನು. 16ಆದರೆ ಕೆಲವು
ಜನ ಕಡುಬಡವರನ್ನು ನೆಬೂಜರದಾನನು ಆ ಪ್ರದೇಶ
ದಲ್ಲಿಯೇ ಬಿಟ್ಟು ಹೋದನು. ಅವನು ಆ ಜನರನ್ನು
ದ್ರಾಕ್ಷಿತೋಟಗಳಲ್ಲಿ ಮತ್ತು ಹೊಲಗಳಲ್ಲಿ ಕೆಲಸ
ಮಾಡಲು ಬಿಟ್ಟುಹೋದನು.

17ಬಾಬಿಲೋನಿನ ಸೈನಿಕರು ಪವಿತ್ರಾಲಯದ ಕಂಚಿನ
ಕಂಬಗಳನ್ನು ಮುರಿದರು. ಅವರು ಯೆಹೋವನ
ಆಲಯದಲ್ಲಿದ್ದ ಪೀಠಗಳನ್ನು ಮತ್ತು ಕಂಚಿನ ಸರೋವರ
ಗಳನ್ನು ಸಹ ಮುರಿದುಬಿಟ್ಟರು. ಅವರು ಎಲ್ಲಾ ಕಂಚಿನ
ವಸ್ತುಗಳನ್ನು ಬಾಬಿಲೋನಿಗೆ ತೆಗೆದುಕೊಂಡು
ಹೋದರು. 18ಬಾಬಿಲೋನಿನ ಸೈನಿಕರು ಪವಿತ್ರಾಲಯ
ದಿಂದ ಪಾತ್ರೆಗಳು, ಸಲಿಕೆಗಳು, ಕತ್ತರಿಗಳು, ದೊಡ್ಡ
ಬೋಗುಣಿಗಳು, ತಟ್ಟೆಗಳು ಮತ್ತು ಪವಿತ್ರಾಲಯದ
ಸೇವೆಗಾಗಿ ಉಪಯೋಗಿಸಲಾಗುವ ಕಂಚಿನ ಸಾಮಾನು
ಗಳನ್ನು ಬಾಬಿಲೋನಿಗೆ ತೆಗೆದುಕೊಂಡು ಹೋದರು.
19ರಾಜನ ವಿಶೇಷ ರಕ್ಷಕ ದಳದ ಅಧಿಪತಿಯು
ಬೋಗುಣಿಗಳನ್ನು.ಧೂಪಾರತಿಗಳನ್ನು, ದೊಡ್ಡ ಬಟ್ಟಲು
ಗಳನ್ನು, ಪಾತ್ರೆಗಳನ್ನು, ದೀಪಸ್ತಂಭಗಳನ್ನು, ತಟ್ಟೆಗಳನ್ನು.
ಪಾನ ನೈವೇದ್ಯಕ್ಕೆ ಉಪಯೋಗಿಸುವ ಬೋಗುಣಿಗಳನ್ನು
ತೆಗೆದುಕೊಂಡು ಹೋದನು. ಚಿನ್ನ ಅಥವಾ ಬೆಳ್ಳಿಯ
ಪ್ರತಿಯೊಂದು ವಸ್ತುವನ್ನು ಅವನು ತೆಗೆದುಕೊಂಡನು.
20ಎರಡು ಕಂಬಗಳು, ಸಮುದ್ರವೆನಿಸಿಕೊಂಡ ಪಾತ್ರೆಯು
ಅದನ್ನು ಹೊತ್ತುಕೊಂಡಿರುವ ಹನ್ನೆರಡು ಕಂಚಿನ
ಹೋರಿಗಳು ಮತ್ತು ಚಲಿಸಬಲ್ಲ ಅಡ್ಡಣಿಗಳು ಬಹಳ
ಭಾರವಾಗಿದ್ದವು. ರಾಜನಾದ, ಸೊಲೊಮೋನನು
ಯೆಹೋವನ ಆಲಯಕೋಸ್ಕರ ಆ ವಸ್ತುಗಳನ್ನು ಮಾಡಿಸಿ
ದ್ದನು. ಆ ವಸ್ತುಗಳಿಗಾಗಿ ಉಪಯೋಗಿಸಲಾದ ಕಂಚು
ತೂಕ ಮಾಡಲಾರದಷ್ಟು ಭಾರವಾಗಿತ್ತು.

21ಪ್ರತಿಯೊಂದು ಕಂಚಿನ ಕಂಬ ಇಪ್ಪತ್ತೇಳು ಅಡಿ
ಎತ್ತರವಾಗಿದ್ದು ಅದರ ಸುತ್ತಳತೆ ಹದಿನೆಂಟು ಅಡಿ ಇತ್ತು.
ಪ್ರತಿಯೊಂದು ಕಂಬ ಪೊಳ್ಳಾಗಿದ್ದು ಅದರ ತಗಡು ನಾಲ್ಕು
ಅಂಗುಲ ದಪ್ಪವಾಗಿತ್ತು. 22ಮೊದಲನೇ ಕಂಬದ ಮೇಲೆ
ಏಳುವರೆ ಅಡಿ ಎತ್ತರದ ಕಂಚಿನ ಕಂಬವಿತ್ತು. ಅದು
ಅಲ್ಲಲ್ಲಿ ಜಾಲರಿಗಳಿಂದ ಮತ್ತು ಕಂಚಿನ ದಾಳಿಂಬಗಳಿಂದ
ಅಲಂಕೃತವಾಗಿತ್ತು. ಎರಡನೆಯ ಕಂಬದಲ್ಲಿಯೂ
ದಾಳಿಂಬೆಗಳು ಶೋಭಿಸುತ್ತಿದ್ದವು. ಅದು ಮೊದಲನೆ
ಕಂಬದಂತೆ ಇತ್ತು.

23ಕಂಬಗಳ ಪಕ್ಕದಲ್ಲಿ ತೊಂಭತ್ತಾರು ದಾಳಿಂಬೆಗ
ಳಿದ್ದವು. ಜಾಲರಿಯ ಮೇಲೆ ಸುತ್ತಲೂ ಒಟ್ಟಾಗಿ ನೂರು
ದಾಳಿಂಬೆ ಹಣ್ಣುಗಳಿದ್ದವು.

24ರಾಜನ ವಿಶೇಷ ರಕ್ಷಕ ದಳದ ಅಧಿಪತಿಯು ಸೆರಾಯ
ಮತ್ತು ಚೆಫನ್ಯರನ್ನು ಸೆರೆಹಿಡಿದನು. ಸೆರಾಯನು ಮಹಾ
ಯಾಜಕನಾಗಿದ್ದನು ಮತ್ತು ಚೆಫನ್ಯನು ಅವರ
ತರುವಾಯದ ಶ್ರೇಷ್ಠ ಯಾಜಕನಾಗಿದ್ದನು. ಮೂರು ಜನ
ದ್ವಾರಪಾಲಕರನ್ನು ಕೂಡ ಸೆರೆಹಿಡಿಯಲಾಯಿತು.
25ರಾಜನ ವಿಶೇಷ ರಕ್ಷಕ ದಳದ ಅಧಿಪತಿಯು ಸೈನ್ಯದ
ವ್ಯವಸ್ಥಾಪಕನ ಅಧಿಕಾರಿಯನ್ನು ಬಂಧಿಸಿದನು. ಅವನು
ರಾಜನ ಏಳು ಜನ ಆಪ್ತ ಮಂತ್ರಿಗಳನ್ನು ಸಹ ಸೆರೆ
ಹಿಡಿದನು. ಅವರೆಲ್ಲ ಇನ್ನೂ ಜೆರುಸಲೇಮಿನಲ್ಲಿದ್ದರು.
ಯುದ್ಧಕ್ಕೆ ಹೋಗುವವರ ಪಟ್ಟಿಯನ್ನು ಮಾಡುವ ಲಿಪಿ
ಗಾರನನ್ನು ಸಹ ಅವನು ಸೆರೆಹಿಡಿದನು. ನಗರದಲ್ಲಿದ್ದ
ಅರವತ್ತು ಮಂದಿ ಜನ ಸಾಮಾನ್ಯರನ್ನು ಸಹ ಅವನು
ಸೆರೆಹಿಡಿದನು. 26-27ಸೇನಾಧಿಪತಿಯಾದ ನೆಬೂಜರದಾ
ನನು ಆ ಜನರನ್ನೆಲ್ಲ ಸೆರೆಹಿಡಿದನು. ಬಾಬಿಲೋನಿನ
ರಾಜನಲ್ಲಿಗೆ ತಂದನು. ಬಾಬಿಲೋನಿನ ರಾಜನು ರಿಬ್ಲ
ನಗರದಲ್ಲಿದ್ದನು. ರಿಬ್ಲ ನಗರವು ಹಮಾತ್ ಪ್ರದೇಶದ
ಲ್ಲಿದೆ. ಆ ರಿಬ್ಲ ನಗರದಲ್ಲಿಯೇ ರಾಜನು ಅವರನ್ನೆಲ್ಲ
ವಧಿಸಬೇಕೆಂದು ಅಪ್ಪಣೆ ಮಾಡಿದನು. ಯೆಹೂದದ ಜನ
ರನ್ನು ಅವರ ದೇಶದಿಂದ ತೆಗೆದುಕೊಂಡು ಹೋಗಲಾ
ಯಿತು. 28ನೆಬೂಕದ್ನೆಚ್ಚರನು ಸೆರೆಹಿಡಿದುಕೊಂಡವರ
ವಿವರ ಹೀಗಿದೆ:

ರಾಜನಾದ ನೆಬೂಕದ್ನೆಚ್ಚರನ ಆಳ್ವಿಕೆಯ ಏಳನೆ
ವರ್ಷದಲ್ಲಿ* ಯೆಹೂದದಿಂದ ಒಯ್ಯಲ್ಪಟ್ಟ
ಜನರು ಮೂರುಸಾವಿರದ ಇಪ್ಪತ್ತುಮೂರು.

29ನೆಬೂಕದ್ನೆಚ್ಚರನ ಹದಿನೆಂಟನೇ ವರ್ಷ
ದಲ್ಲಿ* ಜೆರುಸಲೇಮಿನಿಂದ ಎಂಟುನೂರ
ಮೂವತ್ತೆರಡು ಜನ.

30ನೆಬೂಕದ್ನೆಚ್ಚರನ ಇಪ್ಪತ್ಮೂರನೇ ವರ್ಷ
ದಲ್ಲಿ* ನೆಬೂಜರದಾನನು ಏಳನೂರ ನಲವ
ತ್ತೈದು ಜನ ಯೆಹೂದಿಯರನ್ನು ಸೆರೆಹಿಡಿದನು.
ನೆಬೂಜರದಾನನು ರಾಜನ ವಿಶೇಷ ರಕ್ಷಕದಳದ
ಅಧಿಪತಿಯಾಗಿದ್ದನು. ಒಟ್ಟಿನಲ್ಲಿ 4,600 ಜನರನ್ನು
ಸೆರೆಹಿಡಿಯಲಾಗಿತ್ತು.

---

**ನೆಬೂಕದ್ನೆಚ್ಚರನ ... 7ನೇ ವರ್ಷ** ಕ್ರಿ.ಪೂ. 598 ಮಧ್ಯದಿಂದ 597 ಮಧ್ಯ
ದವರೆಗೆ.

**ನೆಬೂಕದ್ನೆಚ್ಚರನ 18ನೇ ವರ್ಷ:** ಕ್ರಿ.ಪೂ. 588 ಮಧ್ಯದಿಂದ 587 ಮಧ್ಯ
ದವರೆಗೆ.

**ನೆಬೂಕದ್ನೆಚ್ಚರನ 23ನೇ ವರ್ಷ** ಕ್ರಿ.ಪೂ. 582 ಮಧ್ಯದಿಂದ 581 ಮಧ್ಯ
ದವರೆಗೆ.

### ಯೆಹೋಯಾಖೀನನ ಬಿಡುಗಡೆ

31 ಯೆಹೂದದ ರಾಜನಾಗಿದ್ದ ಯೆಹೋಯಾಖೀನನು
ಮೂವತ್ತೇಳು ವರ್ಷ ಬಾಬಿಲೋನಿನ ಸೆರೆಮನೆಯಲ್ಲಿ
ದ್ದನು. ಆತನ ಕಾರಾಗೃಹವಾಸದ ಮೂವತ್ತೇಳನೇ ವರ್ಷ
ದಲ್ಲಿ ಬಾಬಿಲೋನಿನ ರಾಜನಾದ ಎವೀಲ್ಮೆರೋದಕನು
ಯೆಹೋಯಾಖೀನನ ಮೇಲೆ ದಯೆತೋರಿದನು. ಆ
ವರ್ಷ ಅವನು ಯೆಹೋಯಾಖೀನನನ್ನು ಸೆರೆಮನೆ
ಯಿಂದ ಬಿಡುಗಡೆ ಮಾಡಿದನು. ಇದೇ ವರ್ಷ ಎವೀಲ್ಮೆ
ರೋದಕನು ಯೆಹೋಯಾಖೀನನನ್ನು ಆ ವರ್ಷದ
ಹನ್ನೆರಡನೆ ತಿಂಗಳಿನ ಇಪ್ಪತ್ತೈದನೆ ದಿನ ಬಿಡುಗಡೆ
ಮಾಡಿದನು. 32 ಎವೀಲ್ಮೆರೋದಕನು ಯೆಹೋಯಾ
ಖೀನನೊಂದಿಗೆ ಪ್ರೀತಿಯಿಂದ ಮಾತನಾಡಿದನು. ಅವನು
ತನ್ನ ಸಂಗಡ ಬಾಬಿಲೋನಿನಲ್ಲಿದ್ದ ಎಲ್ಲಾ ರಾಜರುಗಳಿ
ಗಿಂತ ಉನ್ನತಸ್ಥಾನವನ್ನು ಯೆಹೋಯಾಖೀನನಿಗೆ
ಕೊಟ್ಟನು. 33 ಯೆಹೋಯಾಖೀನನು ತನ್ನ ಸೆರೆಮನೆಯ
ಬಟ್ಟೆಗಳನ್ನು ತೆಗೆದುಹಾಕಿದನು. ಅವನು ಬದುಕಿರುವ
ವರೆಗೂ ರಾಜನ ಪಂಕ್ತಿಯಲ್ಲಿ ಊಟ ಮಾಡುತ್ತಿದ್ದನು.
34 ಪ್ರತಿದಿನ ಬಾಬಿಲೋನಿನ ರಾಜನು ಯೆಹೋಯಾಖೀ
ನನಿಗೆ ಭತ್ಯವನ್ನು ಕೊಡುತ್ತಿದ್ದನು. ಯೆಹೋಯಾಖೀ
ನನು ಸಾಯುವವರೆಗೆ ಈ ಕ್ರಮ ಮುಂದುವರೆಯಿತು.

# ಪ್ರಲಾಪಗಳು

### ಜೆರುಸಲೇಮ್ ತನ್ನ ನಾಶನದ ಬಗ್ಗೆ ಅಳುತ್ತಾಳೆ

1 ಒಂದು ಕಾಲದಲ್ಲಿ ಜೆರುಸಲೇಮ್ ಜನಭರಿತ ವಾದ ನಗರವಾಗಿತ್ತು. ಆದರೆ ಈಗ ಆ ನಗರವು ಹಾಳುಬಿದ್ದಿದೆ. ಒಂದು ಕಾಲದಲ್ಲಿ ಜೆರುಸಲೇಮ್ ಅತ್ಯಂತ ದೊಡ್ಡನಗರಗಳಲ್ಲಿ ಒಂದಾಗಿತ್ತು. ಆದರೆ ಈಗ ಅದು ವಿಧವೆಯಂತೆ ಆಗಿದೆ. ಒಂದು ಕಾಲ ದಲ್ಲಿ ಅವಳು ಎಲ್ಲ ನಗರಗಳ ನಡುವೆ ರಾಜ ಕುಮಾರಿಯಂತೆ ಇದ್ದಳು. ಆದರೆ ಈಗ ಅವಳನ್ನು ದಾಸಿಯನ್ನಾಗಿ ಮಾಡಲಾಗಿದೆ.

2 ರಾತ್ರಿಯಲ್ಲಿ ಅವಳು ಬಿಕ್ಕಿಬಿಕ್ಕಿ ಅಳುತ್ತಾಳೆ. ಅವಳ ಕೆನ್ನೆಗಳ ಮೇಲೆ ಕಣ್ಣೀರು ಹರಿಯುತ್ತಿದೆ. ಅವಳನ್ನು ಸಂತೈಸುವವರು ಯಾರೂ ಇಲ್ಲ. ಅವಳ ಮಿತ್ರ ರಾಷ್ಟ್ರಗಳಲ್ಲಿ ಒಂದೂ ಕೂಡ ಅವಳನ್ನು ಸಂತೈಸುವು ದಿಲ್ಲ. ಅವಳ ಸ್ನೇಹಿತರೆಲ್ಲಾ ಅವಳಿಗೆ ದ್ರೋಹ ಮಾಡಿದರು. ಅವಳ ಸ್ನೇಹಿತರೆಲ್ಲಾ ಅವಳಿಗೆ ಶತ್ರುಗ ಳಾದರು.

3 ಅತಿ ಕಷ್ಟಗಳನ್ನು ಅನುಭವಿಸಿದ ಮೇಲೆ ಯೆಹೂದ ಬಂಧನಕ್ಕೊಳಗಾಗಿದ್ದಾಳೆ. ಅತಿಶ್ರಮ ಪಟ್ಟ ಮೇಲೆಯೂ ಅವಳು ಸೆರೆ ಒಯ್ಯಲ್ಪಟ್ಟಿದ್ದಾಳೆ. ಯೆಹೂದ ಬೇರೆ ಜನಾಂಗಗಳ ಜೊತೆಯಲ್ಲಿ ವಾಸಿಸುತ್ತಾಳೆ. ಆದರೆ ಅವಳಿಗೆ ವಿಶ್ರಾಂತಿ ಸಿಕ್ಕಿಲ್ಲ. ಅವಳನ್ನು ಬೆನ್ನಟ್ಟಿದ ಜನರು ಅವಳನ್ನು ಹಿಡಿದು ಕೊಂಡರು. ಆಕೆಯು ಬಳಲಿ ಹೋಗಿದ್ದಾಗಲೇ ಅವಳನ್ನು ಹಿಡಿದುಕೊಂಡರು.

4 ಚೆಯೋನಿಗೆ ಹೋಗುವ ದಾರಿಗಳು ದುಃಖಿಸು ತ್ತಿವೆ. ಅವುಗಳು ದುಃಖಿಸುತ್ತಿವೆ ಏಕೆಂದರೆ ಯಾರೂ ಈಗ ಉತ್ಸವಗಳಿಗಾಗಿ ಚೀಯೋನಿಗೆ ಬರುವ ದಿಲ್ಲ. ಚೀಯೋನಿನ ಎಲ್ಲ ಹೆಬ್ಬಾಗಿಲುಗಳು ನಿರ್ಜನವಾಗಿವೆ. ಚಿಯೋನಿನ ಎಲ್ಲ ಯಾಜಕರು ನರಳಾಡುತ್ತಿದ್ದಾರೆ. ಚಿಯೋನಿನ ತರುಣಿಯ ರನ್ನು ತೆಗೆದುಕೊಂಡು ಹೋಗಲಾಗಿದೆ.* ಇದೆಲ್ಲ ಚಿಯೋನಿಗೆ ಅತಿ ದುಃಖವನ್ನುಂಟು ಮಾಡಿದೆ.

**ತರುಣಿ … ಹೋಗಲಾಗಿದೆ** ಗ್ರೀಕ್ ಭಾಷಾಂತರವನ್ನು ಅನುಸರಿಸಿ ಅರ್ಥ ಕೊಡಲಾಗಿದೆ. ಹೀಬ್ರೂ ಗ್ರಂಥ ಅನುಸರಿಸಿದರೆ, 'ತರುಣಿಯರು ವ್ಯಥೆ ಪಡುತ್ತಿದ್ದಾರೆ' ಎಂದು ಅರ್ಥ ಬರುತ್ತದೆ.

5 ಜೆರುಸಲೇಮಿನ ಶತ್ರುಗಳು ಗೆದ್ದಿದ್ದಾರೆ. ಅವಳ ಶತ್ರುಗಳು ಜಯಶೀಲರಾಗಿದ್ದಾರೆ. ಯೆಹೋ ವನು ಅವಳನ್ನು ದಂಡಿಸಿದ ಕಾರಣ ಹೀಗಾಯಿತು. ಅವಳ ಅನೇಕ ಪಾಪಗಳಿಗಾಗಿ ಆತನು ಜೆರುಸಲೇ ಮನ್ನು ದಂಡಿಸಿದನು. ಅವಳ ಮಕ್ಕಳು ದೂರ ಹೋಗಿದ್ದಾರೆ. ಅವರು ವೈರಿಗಳ ಸೆರೆಯಾಳುಗ ಳಾಗಿ ದೂರಹೋಗಿದ್ದಾರೆ.

6 ಚಿಯೋನಿನ ಮಗಳ* ಸೌಂದರ್ಯವು ಹೊರಟು ಹೋಗಿದೆ. ಅವಳ ರಾಜಕುಮಾರರು ಹುಲ್ಲುಗಾವ ಲನ್ನು ಕಂಡುಕೊಂಡಿಲ್ಲದ ಜಿಂಕೆಯಂತಾಗಿದ್ದಾರೆ. ಅವರು ಬಲಹೀನರಾಗಿ ಓಡಿಹೋದರು. ಬೆನ್ನಟ್ಟಿ ಬಂದ ಜನರಿಗೆ ಬೆಂಗೊಟ್ಟು ಓಡಿಹೋಗಿದ್ದಾರೆ.

7 ಜೆರುಸಲೇಮ್ ಹಿಂದಿನ ದಿನಗಳ ಬಗ್ಗೆ ಯೋಚಿಸು ತ್ತಾಳೆ; ತಾನು ಮನೆಯನ್ನು ಕಳೆದುಕೊಂಡ ಮತ್ತು ಹಿಂಸೆಗೊಳಗಾದ ಕಾಲವನ್ನು ಜ್ಞಾಪಿಸಿಕೊಳ್ಳು ತ್ತಾಳೆ. ಹಿಂದೆ ಅವಳಿಗಿದ್ದ ಎಲ್ಲ ಭೋಗ್ಯ ವಸ್ತು ಗಳನ್ನು ಅವಳು ಜ್ಞಾಪಿಸಿಕೊಳ್ಳುತ್ತಾಳೆ. ಹಳೆಯ ಕಾಲದಲ್ಲಿ ಲಭ್ಯವಿದ್ದ ಎಲ್ಲ ಉತ್ತಮ ವಸ್ತುಗಳನ್ನು ಅವಳು ಸ್ಮರಿಸಿಕೊಳ್ಳುತ್ತಾಳೆ. ತನ್ನ ಜನರನ್ನು ವೈರಿ ಗಳು ವಶಪಡಿಸಿಕೊಂಡ ಸಂಗತಿಯನ್ನು ಅವಳು ಸ್ಮರಿಸುತ್ತಾಳೆ. ಆಗ ತನಗೆ ಸಹಾಯ ಮಾಡಲು ಯಾರೂ ಇರಲಿಲ್ಲವೆಂಬುದನ್ನು ಅವಳು ಜ್ಞಾಪಿಸಿ ಕೊಳ್ಳುತ್ತಾಳೆ. ಅವಳ ಶತ್ರುಗಳು ಅವಳನ್ನು ನೋಡಿ ನಕ್ಕರು. ಅವಳು ಹಾಳಾದುದನ್ನು ನೋಡಿ ಅವರು ನಕ್ಕರು.

8 ಜೆರುಸಲೇಮ್ ಮಹಾಪಾಪ ಮಾಡಿತು. ಜೆರುಸ ಲೇಮ್ ಭಯಂಕರ ಪಾಪ ಮಾಡಿದ್ದಕ್ಕಾಗಿ ಅವಳು ಹಾಳು ಬಿದ್ದ ನಗರವಾದಳು. ಜನರು ಅವಳ ಬಗ್ಗೆ ತಲೆ ಕೊಡಹುವಂತಾಗಿದೆ. ಆಗ ಅವಳನ್ನು ಗೌರವಿ ಸುತ್ತಿದ್ದ ಎಲ್ಲ ಜನ ಈಗ ಅವಳನ್ನು ತಿರಸ್ಕರಿಸುತ್ತಾರೆ. ಏಕೆಂದರೆ ಅವರು ಅವಳ ಬೆತ್ತಲೆ ದೇಹವನ್ನು ನೋಡಿದರು. ಜೆರುಸಲೇಮ್ ನರಳಾಡುತ್ತಿದ್ದಾಳೆ.

**ಚೀಯೋನಿನ ಮಗಳು** ಜೆರುಸಲೇಮಿನ ಇನ್ನೊಂದು ಹೆಸರು.

ಅವಳು ನಾಚಿಕೆಯಿಂದ ತನ್ನ ಮುಖವನ್ನು ತಗ್ಗಿಸಿ
ಕೊಂಡಿದ್ದಾಳೆ.
9 ಜೆರುಸಲೇಮಿನ ಲಂಗಗಳು ಮಲಿನವಾಗಿದ್ದವು.
ಅವಳಿಗೆ ಮುಂದೆ ಏನಾಗುವದೆಂಬುದರ ಬಗ್ಗೆ
ಅವಳು ಯೋಚಿಸಲಿಲ್ಲ. ಅವಳ ಪತನ ವಿಸ್ಮಯ
ಕಾರಿಯಾಗಿತ್ತು. ಅವಳನ್ನು ಸಂತೈಸಲು ಯಾರೂ
ಇರಲಿಲ್ಲ. ''ಅಯ್ಯೋ ಯೆಹೋವನೇ, ನನಗೆಷ್ಟು
ನೋವಾಗಿದೆ. ನೋಡು! ನನ್ನ ಶತ್ರು ತನ್ನನ್ನು ಎಷ್ಟು
ದೊಡ್ಡವನೆಂದು ಭಾವಿಸಿಕೊಂಡಿದ್ದಾನೆ.'' ಎಂದು
ಆಕೆ ಹೇಳುತ್ತಾಳೆ.
10 ಶತ್ರು ತನ್ನ ಕೈಗಳನ್ನು ಚಾಚಿದನು. ಅವಳ ಎಲ್ಲ
ಅಮೂಲ್ಯ ವಸ್ತುಗಳನ್ನು ತೆಗೆದುಕೊಂಡನು.
ಯೆಹೋವನೇ, ಆ ಜನರು ನಿನ್ನ ಸಭೆಯನ್ನು
ಪ್ರವೇಶಿಸಬಾರದೆಂದು ನೀನು ಆಜ್ಞಾಪಿಸಿದ್ದರೂ
ಪರಕೀಯರು ತನ್ನ ಪವಿತ್ರಾಲಯವನ್ನು ಪ್ರವೇಶಿ
ಸುವದನ್ನು ಅವಳು ನೋಡಬೇಕಾಯಿತು.
11 ಜೆರುಸಲೇಮಿನ ಎಲ್ಲ ಜನರು ನರಳಾಡುತ್ತಿದ್ದಾರೆ.
ಅವಳ ಎಲ್ಲ ಜನರು ಆಹಾರಕ್ಕಾಗಿ ಹುಡುಕುತ್ತಿ
ದ್ದಾರೆ. ಅವರು ತಮ್ಮ ಎಲ್ಲ ಒಳ್ಳೆಯವಸ್ತುಗಳನ್ನು
ಅನ್ನಕ್ಕಾಗಿ ಕೊಟ್ಟುಬಿಡುತ್ತಿದ್ದಾರೆ. ಬದುಕಿರುವ
ಸಲುವಾಗಿ ಅವರು ಹೀಗೆ ಮಾಡುತ್ತಿದ್ದಾರೆ.
''ಯೆಹೋವನೇ, ನನ್ನ ಕಡೆಗೆ ನೋಡು! ಜನರು
ನನ್ನನ್ನು ಹೇಗೆ ದ್ವೇಷಿಸುತ್ತಾರೆ ನೋಡು'' ಎಂದು
ಜೆರುಸಲೇಮ್ ಬೇಡಿಕೊಂಡಳು.
12 ರಸ್ತೆಯಲ್ಲಿ ಹಾದುಹೋಗುವ ಜನರೇ, ನೀವು ನನ್ನ
ಬಗ್ಗೆ ಯೋಚಿಸುವುದಿಲ್ಲವೆಂದು ತೋರುತ್ತದೆ.
ನನ್ನ ಕಡೆಗೆ ಗಮನಕೊಡಿ. ನನ್ನ ನೋವಿನಂಥ
ನೋವು ಮತ್ತೊಂದು ಇದೆಯೇ? ನನಗೆ
ಬಂದಂಥ ನೋವು ಇನ್ನಾವುದಾದರೂ
ಇದೆಯೇ? ದಂಡನೆಯಾಗಿ ಯೆಹೋವನು ನನಗೆ
ಕೊಟ್ಟ ನೋವಿನಂಥ ನೋವು ಮತ್ತೊಂದು
ಇದೆಯೇ? ಆತನು ತನ್ನ ಮಹಾಕೋಪದ ದಿನ
ದಂದು ನನ್ನನ್ನು ದಂಡಿಸಿರುವನು.
13 ಯೆಹೋವನು ಮೇಲಿನಿಂದ ಬೆಂಕಿಯನ್ನು ಕಳಿಸಿ
ದ್ದಾನೆ. ಆ ಬೆಂಕಿ ನನ್ನ ಎಲುಬುಗಳ ಆಳಕ್ಕೆ ಇಳಿದು
ಹೋಗಿದೆ. ಆತನು ನನ್ನ ಪಾದಗಳಿಗೆ ಬಲೆಯನ್ನು
ಒಡ್ಡಿದ್ದಾನೆ. ಆತನು ನನ್ನನ್ನು ಸುತ್ತಲು ತಿರುಗಿಸಿ
ದ್ದಾನೆ. ಆತನು ನನ್ನನ್ನು ಹಾಳುಭೂಮಿಯನ್ನಾಗಿ
ಮಾಡಿದ್ದಾನೆ. ನಾನು ಸದಾ ಬಳಲುತ್ತಿದ್ದೇನೆ.
14 ''ನನ್ನ ಪಾಪಗಳನ್ನೆಲ್ಲ ಒಟ್ಟುಗೂಡಿಸಿ ನೊಗದಂತೆ
ಕಟ್ಟಲಾಗಿದೆ.* ಯೆಹೋವನು ತನ್ನ ಕೈಗಳಿಂದ
ನನ್ನ ಪಾಪಗಳನ್ನು ಒಟ್ಟಿಗೆ ಕಟ್ಟಿದ್ದಾನೆ. ಯೆಹೋ
ವನ ಆ ನೊಗವು ನನ್ನ ಕತ್ತಿನ ಮೇಲೆ ಇದೆ.
ಯೆಹೋವನು ನನ್ನನ್ನು ದುರ್ಬಲಗೊಳಿಸಿದ್ದಾನೆ.
ನಾನು ಎದುರಿಸಲಾಗದ ಜನರ ಕೈಗೆ ಯೆಹೋ
ವನು ನನ್ನನ್ನು ಒಪ್ಪಿಸಿ ಕೊಟ್ಟಿದ್ದಾನೆ.
15 ''ನನ್ನ ಶೂರ ಸೈನಿಕರನ್ನೆಲ್ಲಾ ಯೆಹೋವನು ತಿರಸ್ಕರಿ
ಸಿದ್ದಾನೆ. ಆ ಸೈನಿಕರು ನಗರದ ಒಳಭಾಗದಲ್ಲಿ
ದ್ದರು. ಆಗ ಯೆಹೋವನು ನನ್ನ ವಿರುದ್ಧ ಒಂದು
ಜನರ ಗುಂಪನ್ನು ತಂದನು. ಆತನು ನನ್ನ ತರುಣ
ಸೈನಿಕರನ್ನು ಕೊಲ್ಲುವ ಸಲುವಾಗಿ ಆ ಜನರನ್ನು
ತಂದನು. ಯೆಹೋವನು ದ್ರಾಕ್ಷಿಯನ್ನು ಆಲೆ
ಯಲ್ಲಿ ತುಳಿದಿದ್ದಾನೆ. ಆ ದ್ರಾಕ್ಷಿ ಆಲೆಯು
ಜೆರುಸಲೇಮ್ ಕನ್ನಿಕೆಗೆ ಸೇರಿದ್ದು.
16 ''ನಾನು ಈ ಎಲ್ಲ ವಿಪತ್ತುಗಳಿಗಾಗಿ ಅಳುತ್ತೇನೆ. ನನ್ನ
ಕಣ್ಣುಗಳಿಂದ ಧಾರಾಕಾರವಾಗಿ ನೀರು ಸುರಿಯು
ತ್ತಿದೆ. ನನ್ನನ್ನು ಸಂತೈಸುವವರು ಯಾರೂ ಸಮೀಪ
ದಲ್ಲಿ ಇಲ್ಲ; ನನ್ನನ್ನು ಪ್ರೋತ್ಸಾಹಿಸುವವರು
ಯಾರೂ ಇಲ್ಲ. ನನ್ನ ಮಕ್ಕಳು ಹಾಳುಬಿದ್ದ ಭೂಮಿ
ಯಂತಿದ್ದಾರೆ. ಶತ್ರುವು ಜಯಶಾಲಿಯಾದ
ಕಾರಣ ಅವರು ಹಾಗಾಗಿದ್ದಾರೆ.''
17 ಚೀಯೋನು ತನ್ನ ಕೈಗಳನ್ನು ಚಾಚಿದಳು. ಅವಳನ್ನು
ಸಂತೈಸುವವರು ಯಾರೂ ಇರಲಿಲ್ಲ. ಯಾಕೋಬ
ನಿಗೆ ವೈರಿಗಳಾಗಬೇಕೆಂದು ಅವನ ನೆರೆಹೊರೆಯ
ವರಿಗೆ ಯೆಹೋವನು ಆಜ್ಞಾಪಿಸಿದ್ದನು. ಜೆರುಸ
ಲೇಮ್ ಒಂದು ಹೊಲಸು ವಸ್ತುವಾಗಿದ್ದಾಳೆ. ಆ
ವೈರಿಗಳ ಮಧ್ಯದಲ್ಲಿ ಅವಳು ಒಂದು ಹೊಲಸು
ವಸ್ತುವಾಗಿದ್ದಾಳೆ.
18 ಅವಳು ಹೇಳಿದಳು, ''ಯೆಹೋವನು ಮಾಡಿದ್ದು
ನ್ಯಾಯವಾಗಿಯೇ ಇದೆ. ಏಕೆಂದರೆ ನಾನು ಆತನ
ಮಾತನ್ನು ಕಿವಿಗೆ ಹಾಕಿಕೊಳ್ಳಲಿಲ್ಲ. ಎಲ್ಲಾ ಜನ
ಗಳೇ, ನನ್ನ ಮಾತುಗಳನ್ನು ಕೇಳಿರಿ. ನನ್ನ ವ್ಯಥೆ
ಯನ್ನು ನೋಡಿರಿ. ನನ್ನ ತರುಣತರುಣಿಯರು ಸೆರೆ
ಒಯ್ಯಲ್ಪಟ್ಟಿದ್ದಾರೆ.
19 ನಾನು ನನ್ನ ನಲ್ಲರನ್ನು ಕೂಗಿ ಕರೆದೆ. ಆದರೆ ಅವರು
ನನಗೆ ಮೋಸ ಮಾಡಿದರು. ನನ್ನ ಯಾಜಕರು
ಮತ್ತು ಹಿರಿಯರು ನಗರದಲ್ಲಿ ಸತ್ತುಹೋದರು.
ಅವರು ತಮಗಾಗಿ ಆಹಾರವನ್ನು ಹುಡುಕುತ್ತಿ
ದ್ದರು. ಅವರು ತಮ್ಮ ಪ್ರಾಣಗಳನ್ನು ಉಳಿಸಿ
ಕೊಳ್ಳಬಯಸಿದರು.''
20 ''ಯೆಹೋವನೇ, ನನ್ನ ಕಡೆ ನೋಡು, ನಾನು
ತೊಂದರೆಯಲ್ಲಿದ್ದೇನೆ. ನನ್ನ ಮನಸ್ಸು ಕ್ಷೋಭೆ
ಗೊಂಡಿದೆ. ನನ್ನ ಮನಸ್ಸಿಗೆ ತಲೆಕೆಳಗಾದಂತೆ

---

**ನನ್ನ ... ಕಟ್ಟಲಾಗಿದೆ** ಅಥವಾ, ''ಆತನು ನನ್ನ ಪಾಪಗಳನ್ನು ವೀಕ್ಷಿಸುತ್ತಿದ್ದಾನೆ.''

ಭಾಸವಾಗುತ್ತಿದೆ. ನಾನು ದುರಹಂಕಾರಿಯಾಗಿ
ದ್ದುದರಿಂದ ನನ್ನ ಮನಸ್ಸಿಗೆ ಹಾಗೆ ಭಾಸವಾಗು
ತ್ತಿದೆ. ಕಾರಣವೇನಂದರೆ, ನಾನು ದಂಗೆಕೋರ
ಳಾಗಿದ್ದೆ. ಬೀದಿಗಳಲ್ಲಿ ನನ್ನ ಮಕ್ಕಳು ಖಡ್ಗಕ್ಕೆ ಆಹು
ತಿಯಾದರು. ಮನೆಯಲ್ಲಿಯೂ ಸಹ ಸಾವಿತ್ತು.
21 ‘‘ನಾನು ನರಳಾಡುತ್ತಿದ್ದೇನೆ. ಅದಕ್ಕಾಗಿ ನನ್ನ ಮಾತು
ಗಳಿಗೆ ಕಿವಿಗೊಡು; ನನ್ನನ್ನು ಸಂತೈಸುವವರು
ಯಾರೂ ಇಲ್ಲ. ನನ್ನ ಎಲ್ಲ ವೈರಿಗಳು ನನ್ನ ಕಷ್ಟಗಳ
ಬಗ್ಗೆ ಕೇಳಿದ್ದಾರೆ. ಅವರು ಸಂತೋಷ ಪಡುತ್ತಿ
ದ್ದಾರೆ. ನೀನು ನನಗೆ ಈ ಸ್ಥಿತಿಯನ್ನು ತಂದದ್ದಕ್ಕಾಗಿ
ಅವರು ಸಂತೋಷಪಡುತ್ತಲಿದ್ದಾರೆ. ನೀನು ಪ್ರಕಟಿ
ಸಿದ ಆ ದಿನವನ್ನು ಬರಮಾಡು. ಆ ದಿನ ನನ್ನ ಶತ್ರು
ಗಳ ಸ್ಥಿತಿ ನನ್ನ ಇಂದಿನ ಸ್ಥಿತಿಯಂತೆ ಆಗಲಿ.
22 ‘‘ನನ್ನ ಶತ್ರುಗಳು ಎಷ್ಟು ದುಷ್ಟರಾಗಿದ್ದಾರೆ ನೋಡು.
ನನ್ನ ಎಲ್ಲ ಪಾಪಗಳ ನಿಮಿತ್ತ ನೀನು ನನಗೆ ಮಾಡಿ
ದಂತೆ ಅವರಿಗೂ ಮಾಡಲು ನಿನಗೆ ಸಾಧ್ಯವಾಗು
ವುದು. ನಾನು ಪದೇಪದೇ ನರಳಾಡುತ್ತಿರುವುದ
ರಿಂದ ನೀನು ಇದನ್ನು ಮಾಡಬೇಕು. ನನ್ನ ಹೃದ
ಯವು ಅಸ್ವಸ್ಥಗೊಂಡಿರುವುದರಿಂದ ನೀನು
ಇದನ್ನು ಮಾಡಬೇಕು.’’

### ಯೆಹೋವನು ಜೆರುಸಲೇಮನ್ನು ನಾಶಮಾಡಿದನು

2 ಕೋಪೋದ್ರಿಕ್ತನಾದ ಯೆಹೋವನು ಚಿಯೋ
ನಿನ ಮಗಳ* ಮೇಲೆ ಹೇಗೆ ಕಾರ್ಮೋಡಗಳು
ಕವಿಯುವಂತೆ ಮಾಡಿದ್ದಾನೆ ನೋಡಿರಿ. ಆತನು
ಇಸ್ರೇಲಿನ ವೈಭವವನ್ನು ಆಕಾಶದಿಂದ ಭೂಮಿಗೆ
ಎಸೆದಿದ್ದಾನೆ. ಯೆಹೋವನಿಗೆ ಕೋಪ ಬಂದಾಗ
ಆತನು ಇಸ್ರೇಲ್ ತನ್ನ ಪಾದಪೀಠವೆಂಬುದನ್ನು
ಗಮನಕ್ಕೆ ತಂದುಕೊಳ್ಳಲಿಲ್ಲ.
2 ಯೆಹೋವನು ಯಾಕೋಬನ* ಮನೆಗಳನ್ನು
ನಾಶಪಡಿಸಿದನು. ಅವನು ಕನಿಕರವಿಲ್ಲದೆ ಅವು
ಗಳನ್ನು ನುಂಗಿಬಿಟ್ಟನು. ತನ್ನ ಕೋಪದಲ್ಲಿ ಆತನು
ಯೆಹೂದದ ಮಗಳ* ಕೋಟೆಗಳನ್ನು ನಾಶ
ಪಡಿಸಿದನು. ಯೆಹೋವನು ಯೆಹೂದ ರಾಜ್ಯ
ವನ್ನೂ ಮತ್ತು ಅದರ ಅಧಿಪತಿಗಳನ್ನೂ ನೆಲಕ್ಕೆ
ಅಪ್ಪಳಿಸಿದನು. ಆತನು ಯೆಹೂದ ರಾಜ್ಯಕ್ಕೆ
ಅವಮಾನ ಮಾಡಿದ್ದಾನೆ.
3 ತನ್ನ ಕೋಪದ ಭರದಲ್ಲಿ ಯೆಹೋವನು ಇಸ್ರೇ
ಲಿನ ಶಕ್ತಿಯನ್ನೆಲ್ಲ ಕತ್ತರಿಸಿ ಹಾಕಿದನು. ಆತನು
ಇಸ್ರೇಲಿನಿಂದ ತನ್ನ (ಯೆಹೋವನ) ಬಲಗೈ
ಯನ್ನು ಹಿಂತೆಗೆದುಕೊಂಡನು. ಶತ್ರು ಬಂದಾಗ
ಆತನು ಹೀಗೆ ಮಾಡಿದನು. ಅಗ್ನಿಜ್ವಾಲೆಗಳಂತೆ
ಆತನು ಯಾಕೋಬಿನಲ್ಲಿ ಉರಿದನು. ಸುತ್ತಮುತ್ತ
ಲೆಲ್ಲ (ಪ್ರತಿಯೊಂದನ್ನೂ) ದಹಿಸುವ ಬೆಂಕಿಯಂತೆ
ಆತನಿದ್ದನು.
4 ಯೆಹೋವನು ವೈರಿಯಂತೆ ತನ್ನ ಬಿಲ್ಲನ್ನು ಬಾಗಿಸಿ
ದನು. ತನ್ನ ಬಲಗೈಯಲ್ಲಿ ಖಡ್ಗವನ್ನು ಧರಿಸಿದನು.
ಆತನು ಯೆಹೂದದ ಎಲ್ಲ ಆಕರ್ಷಕ ಜನರನ್ನು
ಕೊಂದುಹಾಕಿದನು. ಆತನು ಶತ್ರುವಿನಂತೆ ಅವ
ರನ್ನು ಕೊಂದನು. ಆತನು ತನ್ನ ರೋಷಾಗ್ನಿಯನ್ನು
ಹೊರಸೂಸಿದನು. ಆತನು ಅದನ್ನು ಚೀಯೋನಿನ
ಗುಡಾರಗಳ ಮೇಲೆ ಸುರಿಸಿದನು.
5 ಆತನು ಒಬ್ಬ ಶತ್ರುವಿನಂತಾಗಿದ್ದಾನೆ. ಆತನು ಇಸ್ರೇ
ಲನ್ನು ನುಂಗಿದನು (ನಾಶಮಾಡಿದನು). ಆತನು
ಅವಳ ಎಲ್ಲ ಅರಮನೆಗಳನ್ನು ನುಂಗಿಬಿಟ್ಟನು.
ಆತನು ಅವಳ ಎಲ್ಲ ಕೋಟೆಗಳನ್ನು ನುಂಗಿ
ಬಿಟ್ಟನು. ಯೆಹೂದ ಜನಾಂಗದಲ್ಲಿ ಆತನು ಹೆಚ್ಚಿನ
ದುಃಖವನ್ನು ಉಂಟುಮಾಡಿ ಶೋಕವನ್ನು
ಹರಡಿದ್ದಾನೆ.
6 ಯೆಹೋವನು ತನ್ನ ಸ್ವಂತ ಗುಡಾರವನ್ನು ಒಂದು
ತೋಟವೋ ಎಂಬಂತೆ ಹಾಳು ಮಾಡಿದ್ದಾನೆ.
ಜನರು ಆತನನ್ನು ಆರಾಧಿಸಲು ಸೇರಿ ಬರುತ್ತಿದ್ದ
ಸ್ಥಳವನ್ನು ನಾಶಪಡಿಸಿದ್ದಾನೆ. ಚೀಯೋನಿನಲ್ಲಿ
ಜನರು ಮಹೋತ್ಸವಗಳನ್ನು ಮತ್ತು ವಿಶೇಷ
ವಿಶ್ರಾಂತಿ ದಿನಗಳನ್ನು (ಸಬ್ಬತ್ ದಿನಗಳನ್ನು)
ಮರೆಯುವಂತೆ ಯೆಹೋವನು ಮಾಡಿದ್ದಾನೆ.
ಯೆಹೋವನು ರಾಜನನ್ನು ಮತ್ತು ಯಾಜಕರನ್ನು
ತಿರಸ್ಕರಿಸಿದ್ದಾನೆ. ಆತನು ತನ್ನ ಕಡುಕೋಪದಿಂದ
ಅವರನ್ನು ತಿರಸ್ಕರಿಸಿದ್ದಾನೆ.
7 ಯೆಹೋವನು ತನ್ನ ಯಜ್ಞವೇದಿಕೆಯನ್ನು ತಿರಸ್ಕ
ರಿಸಿದ್ದಾನೆ. ಆತನು ತನ್ನ ಪವಿತ್ರಾಲಯವನ್ನು ತಿರಸ್ಕ
ರಿಸಿದ್ದಾನೆ. ಆತನು ಜೆರುಸಲೇಮಿನ ಅರಮನೆಗಳ
ಗೋಡೆಗಳನ್ನು ಶತ್ರುಗಳ ವಶಮಾಡಿದ್ದಾನೆ. ವೈರಿ
ಗಳು ಯೆಹೋವನ ಪವಿತ್ರ ಆಲಯದಲ್ಲಿ ಗದ್ದಲ
ವನ್ನು ಮಾಡಿದರು. ಅವರು ಉತ್ಸವದ ದಿನದಂತೆ
ಗದ್ದಲವನ್ನು ಮಾಡಿದರು.
8 ಯೆಹೋವನು ಚೀಯೋನ್ ಕುಮಾರಿಯ ಪೌಳಿ
ಗೋಡೆಯನ್ನು ನಾಶಮಾಡಬೇಕೆಂದು ಯೋಚಿಸಿ
ದ್ದಾನೆ. ಆತನು ಅಳತೆದಾರದಿಂದ ಒಡೆಯ
ಬೇಕಾದ ಗೋಡೆಗೆ ಗುರುತುಮಾಡಿದ್ದಾನೆ. ಆತನು
ತಾನು ಮಾಡುತ್ತಿದ್ದ ನಾಶನವನ್ನು ನಿಲ್ಲಿಸಲಿಲ್ಲ.

---

**ಚಿಯೋನಿನ ಮಗಳು** ಜೆರುಸಲೇಮ್ ನಗರದ ಇನ್ನೊಂದು ಹೆಸರು.

**ಯಾಕೋಬ** ಇಸ್ರೇಲಿನ ಇನ್ನೊಂದು ಹೆಸರು.

**ಯೆಹೂದದ ಮಗಳು** ಯೆಹೂದ ಜನಾಂಗ.

ಪೌಳಿಗೋಡೆಗಳು ಮತ್ತು ಗೋಪುರಗಳು ದುಃಖ
ದಿಂದ ಗೋಳಾಡುವಂತೆ ಆತನು ಮಾಡಿದ್ದಾನೆ.
ಅವೆರಡೂ ಕುಸಿದುಹೋಗಿವೆ.
9 ಜೆರುಸಲೇಮಿನ ಹೆಬ್ಬಾಗಿಲುಗಳು ನೆಲದಲ್ಲಿ
ಹೂತು ಹೋಗಿವೆ. ಆತನು ಹೆಬ್ಬಾಗಿಲುಗಳ ಅಗು
ಳಿಗಳನ್ನು ಮುರಿದು ಚೂರುಚೂರು ಮಾಡಿದ್ದಾನೆ.
ಅವಳ ರಾಜನು ಮತ್ತು ರಾಜಕುಮಾರರು ಅನ್ಯ
ಜನಾಂಗಗಳ ಮಧ್ಯದಲ್ಲಿದ್ದಾರೆ. ಆ ಜನರಿಗೆ ಉಪ
ದೇಶ ಮಾಡಲು ಯಾರೂ ಇಲ್ಲ. ಪ್ರವಾದಿಗಳಿಗೆ
ಯೆಹೋವನಿಂದ ಯಾವ ದರ್ಶನಗಳೂ ಇಲ್ಲ.
10 ಚಿಯೋನಿನ ಹಿರಿಯರು ನೆಲದ ಮೇಲೆ ಮೌನ
ವಾಗಿ ಕುಳಿತುಕೊಂಡಿದ್ದಾರೆ. ಅವರು ತಮ್ಮ ತಲೆ
ಗಳ ಮೇಲೆ ಧೂಳನ್ನು ತೂರಿಕೊಂಡು ಗೋಣಿ
ತಟ್ಟನ್ನು ಸುತ್ತಿಕೊಂಡಿದ್ದಾರೆ. ಜೆರುಸಲೇಮಿನ
ತರುಣಿಯರು ದುಃಖದಿಂದ ತಲೆ ತಗ್ಗಿಸಿ
ಕೊಂಡಿದ್ದಾರೆ.
11 ಕಂಬನಿ ಸುರಿದು ನನ್ನ ಕಣ್ಣುಗಳು ಇಂಗಿಹೋಗಿವೆ.
ನನ್ನ ಕರುಳು ತಳಮಳಗೊಂಡಿದೆ. ನನ್ನ ಹೃದಯ
ವನ್ನು ನೆಲಕ್ಕೆ ಚೆಲ್ಲಲಾಗಿದೆ ಎಂದೆನಿಸುತ್ತಿದೆ. ನನ್ನ
ಜನರ ವಿನಾಶದಿಂದ ನನಗೆ ಹೀಗಾಗಿದೆ. ಮಕ್ಕಳು
ಮತ್ತು ಶಿಶುಗಳು ಮೂರ್ಛೆ ಹೋಗುತ್ತಿದ್ದಾರೆ.
ಅವರು ನಗರದ ಚೌಕಗಳಲ್ಲಿ ಮೂರ್ಛೆ
ಹೋಗುತ್ತಿದ್ದಾರೆ.
12 ಆ ಮಕ್ಕಳು ತಮ್ಮ ತಾಯಂದಿರನ್ನು ರೊಟ್ಟಿ ಮತ್ತು
ದ್ರಾಕ್ಷಾರಸ ಎಲ್ಲಿದೆ?'' ಎಂದು ಕೇಳುತ್ತಿದ್ದಾರೆ.
ಅವರು ಅಸುನೀಗುವಾಗ ಈ ಪ್ರಶ್ನೆಯನ್ನು ಕೇಳುತ್ತಿ
ದ್ದಾರೆ. ಅವರು ತಮ್ಮ ತಾಯಂದಿರ ಮಡಿಲ
ಲ್ಲಿಯೇ ಪ್ರಾಣ ಬಿಡುತ್ತಿದ್ದಾರೆ.
13 ಜೆರುಸಲೇಮ್ ಕುಮಾರಿಯೇ, ನಾನು ನಿನ್ನನ್ನು
ಯಾವುದಕ್ಕೆ ಹೋಲಿಸಲಿ? ಯಾವುದರೊಂದಿಗೆ
ನಿನ್ನ ತುಲನೆ ಮಾಡಲಿ? ಚೀಯೋನ್ ಕುಮಾ
ರಿಯೇ, ಯಾವದರೊಂದಿಗೆ ನಿನ್ನ ತುಲನೆ
ಮಾಡಲಿ? ನಾನು ಹೇಗೆ ನಿನ್ನನ್ನು ಸಂತೈಸಲಿ. ನಿನ್ನ
ವಿನಾಶವು ಸಾಗರದಷ್ಟು ಅಪಾರ. ಯಾರೂ
ನಿನ್ನನ್ನು ಸ್ವಸ್ಥ ಮಾಡಲಾರರು ಎಂದೆನಿಸುತ್ತದೆ.
14 ನಿನ್ನ ಪ್ರವಾದಿಗಳು ನಿನಗಾಗಿ ದರ್ಶನಗಳನ್ನು
ಕಂಡರು. ಆದರೆ ಅವರ ದರ್ಶನಗಳು ನಿರರ್ಥಕ
ವಾದ ಹುಸಿನುಡಿಗಳಾಗಿವೆ. ಅವರು ನಿನ್ನ ಪಾಪ
ಕಾರ್ಯಗಳನ್ನು ಬಹಿರಂಗಪಡಿಸಲಿಲ್ಲ. ಅವರು
ಪರಿಸ್ಥಿತಿಯನ್ನು ಸುಧಾರಿಸುವ ಪ್ರಯತ್ನ ಮಾಡ
ಲಿಲ್ಲ. ಅವರು ನಿನ್ನ ಕುರಿತು ಸಂದೇಶಗಳನ್ನು
ಪ್ರವಾದಿಸಿದರು. ಆದರೆ ಅವು ನಿರಾಧಾರವಾದ
ಸಂದೇಶಗಳಾಗಿದ್ದು ನಿನ್ನನ್ನು ಮರುಳು
ಗೊಳಿಸಿದವು.
15 ಪಕ್ಕದಲ್ಲಿ ದಾರಿ ಹಿಡಿದು ಹೋಗುವ ಜನರು
ನಿನ್ನನ್ನು ನೋಡಿ ಅಪಹಾಸ್ಯದಿಂದ ಚಪ್ಪಾಳೆ ತಟ್ಟು
ತ್ತಾರೆ. ಜೆರುಸಲೇಮಿನ ಮಗಳ ಸ್ಥಿತಿಯನ್ನು
ನೋಡಿ ಅವರು ಸಿಳ್ಳುಹಾಕುತ್ತಾರೆ ಮತ್ತು ತಲೆ
ಯಾಡಿಸುತ್ತಾರೆ.'' ಜನರಿಂದ 'ಪರಿಪೂರ್ಣ
ಸುಂದರ ನಗರ' 'ಸಮಸ್ತಲೋಕದ ಸಂತೋಷ'
ಎಂದು ಕರೆಸಿಕೊಂಡದ್ದು ಇದೇ ನಗರವೇ?''
ಎಂದು ಅವರು ಕೇಳುತ್ತಾರೆ.
16 ನಿನ್ನ ಎಲ್ಲ ವೈರಿಗಳು ನಿನ್ನನ್ನು ನೋಡಿ ಬಾಯಿ
ತೆರೆದು ಸಿಳ್ಳುಹಾಕಿ ಹಲ್ಲು ಕಡಿಯುತ್ತಾರೆ. ''ನಾವು
ಅವರನ್ನು ಸಂಪೂರ್ಣವಾಗಿ ನುಂಗಿದೆವು! ನಿಜ
ವಾಗಿ ನಾವು ಈ ದಿನವನ್ನೇ ನಿರೀಕ್ಷಿಸುತ್ತಿದ್ದೆವು.
ಅಂತೂ ಕೊನೆಗೆ ಇದು ನೆರವೇರುವುದನ್ನು ನಾವು
ಕಂಡೆವು'' ಎಂದು ಅವರು ಅನ್ನುತ್ತಾರೆ.
17 ಯೆಹೋವನು ತಾನು ನಿಯೋಜಿಸಿದಂತೆ ಮಾಡಿ
ದನು. ತಾನು ಮಾಡುತ್ತೇನೆಂದು ಹೇಳಿದ್ದನ್ನು
ಆತನು ಮಾಡಿದ್ದಾನೆ. ಪುರಾತನ ಕಾಲದಿಂದ ತಾನು
ವಿಧಿಸಿದ್ದನ್ನು ಆತನು ಮಾಡಿದ್ದಾನೆ. ಆತನು ನಿಷ್ಕರು
ಣೆಯಿಂದ ನಾಶಮಾಡಿದ್ದಾನೆ. ನಿನಗೆ ಸಂಭವಿಸಿದ
ವುಗಳ ಮೂಲಕವಾಗಿ ಆತನು ನಿನ್ನ ವೈರಿಗಳನ್ನು
ಸಂತೋಷಪಡಿಸಿದ್ದಾನೆ. ಆತನು ನಿನ್ನ ವೈರಿಗಳ
ಸಾಮರ್ಥ್ಯವನ್ನು ಹೆಚ್ಚಿಸಿದ್ದಾನೆ.
18 ಜೆರುಸಲೇಮ್ ನಗರದ ಗೋಡೆಯೇ, ಮನಃ
ಪೂರ್ವಕವಾಗಿ ಯೆಹೋವನಲ್ಲಿ ಮೊರೆಯಿಡು.
ನಿನ್ನ ಕಣ್ಣೀರು ಹಗಲಿರುಳು ನದಿಯಂತೆ ಹರಿ ಯಲಿ
ನಿಲ್ಲಿಸಬೇಡ. ನಿನ್ನ ಕಣ್ಣುಗಳಿಗೆ ವಿರಾಮ
ಸಿಗುವುದು ಬೇಡ.
19 ರಾತ್ರಿಯ ಒಂದೊಂದು ಜಾವದ ಆರಂಭದಲ್ಲಿ
ಎದ್ದೆದ್ದು ಗೋಳಾಡಿರಿ. ನಿಮ್ಮ ಹೃದಯವು ನೀರಿ
ನಂತೆ ಹರಿಯಲಿ. ನಿಮ್ಮ ಹೃದಯಸಾರವನ್ನು
ಯೆಹೋವನ ಸಮ್ಮುಖದಲ್ಲಿ ಹೊಯ್ದುಬಿಡಿರಿ.
ನಿಮ್ಮ ಕೈಗಳನ್ನು ಮೇಲೆತ್ತಿ ಯೆಹೋವನಿಗೆ ಪ್ರಾರ್ಥಿ
ಸಿರಿ. ನಿಮ್ಮ ಮಕ್ಕಳು ಬದುಕಲಿ ಎಂದು ಆತನನ್ನು
ಕೇಳಿಕೊಳ್ಳಿರಿ. ಹಸಿವೆಯಿಂದ ಮೂರ್ಛೆ ಹೋಗು
ತ್ತಿದ್ದ ನಿಮ್ಮ ಮಕ್ಕಳ ಪ್ರಾಣ ಉಳಿಯಲಿ ಎಂದು
ಆತನನ್ನು ಪ್ರಾರ್ಥಿಸಿರಿ. ಹಸಿವೆಯಿಂದ ಅವರು
ನಗರದ ಎಲ್ಲ ಬೀದಿಗಳಲ್ಲಿ ಮೂರ್ಛೆ
ಹೋಗುತ್ತಿದ್ದಾರೆ.
20 ಯೆಹೋವನೇ, ನನ್ನ ಕಡೆಗೆ ನೋಡು. ನೀನು
ಇಷ್ಟೆಲ್ಲ ಮಾಡಿದ್ದು ಯಾರಿಗೆ ಎಂಬುದನ್ನು

ನೋಡು. ನಾನು ನಿನಗೆ ಈ ಪ್ರಶ್ನೆಗಳನ್ನು ಕೇಳ
ಬಯಸುತ್ತೇನೆ. ಏನು, ಸ್ತ್ರೀಯರು ತಾವು ಹೆತ್ತ
ಮಕ್ಕಳನ್ನೇ ತಿನ್ನಬೇಕೆ? ಸ್ತ್ರೀಯರು ತಾವು ಲಾಲನೆ
ಪಾಲನೆ ಮಾಡಿದ ಮಕ್ಕಳನ್ನೇ ತಿನ್ನಬೇಕೆ?
ಯೆಹೋವನ ಪವಿತ್ರ ಆಲಯದಲ್ಲಿಯೇ ಯಾಜಕ
ನನ್ನು ಮತ್ತು ಪ್ರವಾದಿಯನ್ನು ಕೊಲ್ಲಬೇಕೆ?
21 ನಗರದ ಬೀದಿಗಳಲ್ಲಿ ತರುಣರು ಮತ್ತು ವೃದ್ಧರು
ನೆಲದ ಮೇಲೆ ಬಿದ್ದಿದ್ದಾರೆ. ನನ್ನ ಯುವತಿಯರು
ಮತ್ತು ಯುವಕರು ಖಡ್ಗದಿಂದ ಹತರಾಗಿದ್ದಾರೆ.
ಯೆಹೋವನೇ, ನಿನಗೆ ಕೋಪಬಂದ ದಿನ ಅವ
ರನ್ನು ಕೊಂದು ಬಿಟ್ಟೆ; ಕರುಣೆ ತೋರದೆ ಅವರನ್ನು
ಸಂಹರಿಸಿದೆ.
22 ಭೀತಿಯು ಸುತ್ತಮುತ್ತಲಿಂದ ನನ್ನ ಕಡೆಗೆ ಬರು
ವಂತೆ ನೀನು ಆಹ್ವಾನಿಸಿದೆ. ಯೆಹೋವನ
ಕೋಪದ ದಿನದಂದು ಯಾರೂ ತಪ್ಪಿಸಿಕೊಳ್ಳ
ಲಿಲ್ಲ. ಯಾರೂ ಉಳಿಯಲಿಲ್ಲ. ನಾನು ಸಾಕಿಸಲ
ಹಿದವರನ್ನು ನನ್ನ ವೈರಿಯು ಸಂಹರಿಸಿದನು.

### ಸಂಕಟದ ಅರ್ಥ

3 ಯೆಹೋವನ ರೌದ್ರ ದಂಡದಿಂದ ಸಂಕಟವನ್ನು
ಅನುಭವಿಸಿರುವವನು ನಾನೇ!
2 ಯೆಹೋವನು ನನ್ನನ್ನು ಬೆಳಕೇ ಇಲ್ಲದ ಕತ್ತಲೆಗೆ
ನಡೆಸಿಕೊಂಡು ಬಂದನು.
3 ಯೆಹೋವನು ತನ್ನ ಕೈಯನ್ನು ನನಗೆ ವಿರೋಧ
ವಾಗಿ ತಿರುಗಿಸಿದನು. ಆತನು ಇಡೀ ದಿನವೆಲ್ಲಾ
ಮತ್ತೆ ಮತ್ತೆ ಹಾಗೆಯೇ ಮಾಡಿದನು.
4 ಆತನು ನನ್ನ ಮಾಂಸವನ್ನು ಮತ್ತು ಚರ್ಮವನ್ನು
ಕಂದಿಸಿದ್ದಾನೆ. ಆತನು ನನ್ನ ಮೂಳೆಗಳನ್ನು
ಮುರಿದುಹಾಕಿದನು.
5 ಆತನು ನನ್ನನ್ನು ಕಠೋರತೆಯಿಂದಲೂ ಆಪತ್ತಿ
ನಿಂದಲೂ ಸುತ್ತುವರಿದು ಮುತ್ತಿಗೆ ಹಾಕಿದ್ದಾನೆ.
6 ಬಹುಕಾಲದ ಹಿಂದೆಯೇ ಸತ್ತಿರುವವರಂತೆ
ನನ್ನನ್ನು ಕತ್ತಲೆಯಲ್ಲಿ ಕುಳ್ಳಿರಿಸಿದ್ದಾನೆ.
7 ಯೆಹೋವನು ನನ್ನನ್ನು ಬಂಧಿಸಿ ನಾನು ಹೊರಗೆ
ಬರಲಾಗದಂತೆ ಮಾಡಿದನು. ಆತನು ನನ್ನನ್ನು
ಬಲವಾದ ಸರಪಣಿಗಳಿಂದ ಕಟ್ಟಿ ಹಾಕಿದನು.
8 ನಾನು ಸಹಾಯಕ್ಕಾಗಿ ಅರಚಿಕೊಳ್ಳುವಾಗಲೂ
ಕೂಗಿಕೊಳ್ಳುವಾಗಲೂ ಯೆಹೋವನು ನನ್ನ
ಪ್ರಾರ್ಥನೆಗೆ ಉತ್ತರ ಕೊಡುವುದಿಲ್ಲ.
9 ಆತನು ನನ್ನ ದಾರಿಯನ್ನು ಕಲ್ಲುಗಳಿಂದ ಮುಚ್ಚಿ
ದ್ದಾನೆ. ಆತನು ನನ್ನ ಹಾದಿಯನ್ನು ಡೊಂಕು
ಗೊಳಿಸಿದ್ದಾನೆ.
10 ನನ್ನ ಪಾಲಿಗಂತೂ ಯೆಹೋವನು ಆಕ್ರಮಣ
ಮಾಡಲು ಸಿದ್ಧವಾಗಿರುವ ಕರಡಿಯಂತೆಯೂ
ಅಡಗಿಕೊಂಡಿರುವ ಸಿಂಹದಂತೆಯೂ ಇದ್ದಾನೆ.
11 ಯೆಹೋವನು ನನ್ನನ್ನು ನನ್ನ ದಾರಿಯಿಂದ
ಓಡಿಸಿದನು. ಆತನು ನನ್ನನ್ನು ಚೂರುಚೂರು
ಮಾಡಿದನು. ಆತನು ನನ್ನನ್ನು ಅಸಹಾಯಕನನ್ನಾಗಿ
ತೊರೆದು ಬಿಟ್ಟಿದ್ದಾನೆ.
12 ಆತನು ತನ್ನ ಬಿಲ್ಲನ್ನು ಸಜ್ಜುಗೊಳಿಸಿದನು. ಆತನು
ತನ್ನ ಬಾಣಗಳಿಂದ ನನಗೆ ಗುರಿಯಿಟ್ಟನು.
13 ಆತನು ನನ್ನ ಹೊಟ್ಟೆಗೆ ತನ್ನ ಬಾಣಗಳಿಂದ
ಹೊಡೆದನು.
14 ನಾನು ನನ್ನ ಜನರಿಗೆಲ್ಲಾ ಹಾಸ್ಯಾಸ್ಪದವಾಗಿದ್ದೇನೆ.
ದಿನವೆಲ್ಲಾ ಅವರು ನನ್ನ ಬಗ್ಗೆ ಹಾಡುಗಳನ್ನು
ಹಾಡುತ್ತಾ ಗೇಲಿ ಮಾಡುತ್ತಾರೆ.
15 ಯೆಹೋವನು ನನಗೆ ಕುಡಿಯಲು ಈ ವಿಷವನ್ನು
(ಶಿಕ್ಷೆಯನ್ನು) ಕೊಟ್ಟನು. ಕಹಿಯಾದ ಈ
ಪಾನೀಯದಿಂದ ಆತನು ನನ್ನನ್ನು ತುಂಬಿಸಿದನು.
16 ಯೆಹೋವನು ನನಗೆ ನುರುಜುಗಲ್ಲನ್ನು ಮುಕ್ಕಿಸಿ
ನನ್ನ ಹಲ್ಲುಗಳನ್ನು ಮುರಿದು ಹಾಕಿದ್ದಾನೆ. ಆತನು
ನನ್ನನ್ನು ಧೂಳಿಗೆ ಹಾಕಿ ತುಳಿದಿದ್ದಾನೆ.
17 ನನಗೆ ಇನ್ನೆಂದಿಗೂ ಸಮಾಧಾನವೇ ಇರುವುದಿಲ್ಲ
ವೆಂದುಕೊಂಡೆನು. ನಾನು ಸಂತೋಷವನ್ನು
ಮರೆತುಬಿಟ್ಟೆನು.
18 ನಾನು ನನ್ನೊಳಗೆ, ''ಯೆಹೋವನು ನನಗೆ
ಸಹಾಯ ಮಾಡುತ್ತಾನೆ ಎಂಬ ನಿರೀಕ್ಷೆ
ಇನ್ನೆಂದಿಗೂ ನನಗಿಲ್ಲ'' ಎಂದುಕೊಂಡೆನು.
19 ನನ್ನ ಸಂಕಟವನ್ನು ಮತ್ತು ಮನೆಯಿಲ್ಲದ ಸ್ಥಿತಿ
ಯನ್ನು ನೆನಸಿಕೊಂಡರೆ ಅದು ಕಹಿ ವಿಷದಂತಿದೆ.
20 ನನ್ನ ಸಂಕಷ್ಟಗಳನ್ನೆಲ್ಲ ನಾನು ಚೆನ್ನಾಗಿ ಜ್ಞಾಪಿಸಿ
ಕೊಳ್ಳುವೆನು, ಆದ್ದರಿಂದ ನಾನು ತುಂಬಾ ವ್ಯಸನ
ಗೊಂಡಿದ್ದೇನೆ.
21 ಆದರೆ ನಾನು ಬೇರೊಂದನ್ನು ಯೋಚಿಸಿ
ಕೊಂಡಾಗ ನಾನು ನಿರೀಕ್ಷೆಯುಳ್ಳವನಾಗುವೆನು.
ನಾನು ಯೋಚಿಸಿಕೊಳ್ಳುವದೇನಂದರೆ:
22 ಯೆಹೋವನ ಪ್ರೀತಿಗೂ ಕರುಣೆಗೂ ಕೊನೆಯೇ
ಇಲ್ಲ. ಆತನ ದಯೆಗೆ ಅಂತ್ಯವೇ ಇಲ್ಲ.
23 ಪ್ರತಿ ಮುಂಜಾನೆಯೂ ಆತನು ಅದನ್ನು ಹೊಸ
ರೀತಿಗಳಲ್ಲಿ ತೋರಿಸುವನು. ಯೆಹೋವನೇ,
ನೀನು ಎಷ್ಟೋ ಸತ್ಯವಂತನು ಮತ್ತು ನಂಬಿಗಸ್ತನು!
24 ನಾನು ನನ್ನೊಳಗೆ, ''ಯೆಹೋವನೇ ನನ್ನ ಪಾಲು;
ಆದ್ದರಿಂದ ನಾನು ಆತನಲ್ಲಿ ಭರವಸವಿಡುವೆನು''
ಎಂದುಕೊಳ್ಳುವೆನು.

25 ಯೆಹೋವನು ತನಗಾಗಿ ಕಾಯುವ ಜನರಿಗೆ ಒಳ್ಳೆಯವನಾಗಿರುತ್ತಾನೆ. ಯೆಹೋವನು ತನ್ನನ್ನು ಎದುರುನೋಡುವ ಜನರಿಗೆ ಒಳ್ಳೆಯವನಾಗಿರುತ್ತಾನೆ.
26 ತನ್ನ ರಕ್ಷಣೆಗಾಗಿ ಯೆಹೋವನಿಗಾಗಿಯೇ ಮೌನದಿಂದ ಕಾಯುವುದು ಮನುಷ್ಯನಿಗೆ ಒಳ್ಳೆಯದು.
27 ಯೌವನದಲ್ಲೆ (ಸಂಕಟದ) ನೊಗವನ್ನು ಹೊರುವುದು ಮನುಷ್ಯನಿಗೆ ಒಳ್ಳೆಯದು.
28 ಯೆಹೋವನು ಈ ಸಂಕಟದ ನೊಗವನ್ನು ಅವನ ಮೇಲೆ ಹಾಕುವಾಗ ಅವನು ಮೌನವಾಗಿ ಕುಳಿತುಕೊಂಡಿರಬೇಕು.
29 ಅವನು ದೀನತೆಯಿಂದ ತನ್ನ ಮುಖವನ್ನು ಧೂಳಿನಲ್ಲಿ ಹಾಕಬೇಕು. ಆಗ ಅವನ ಜೀವಕ್ಕೆ ನಿರೀಕ್ಷೆ ಇದ್ದರೂ ಇರಬಹುದು.
30 ಆ ವ್ಯಕ್ತಿಯು ತನ್ನನ್ನು ಹೊಡೆಯುವವರಿಗೆ ತನ್ನ ಕೆನ್ನೆಯನ್ನು ಒಡ್ಡಬೇಕು. ಅವನು ತನಗೆ ಜನರಿಂದಾಗುವ ಗೇಲಿಯನ್ನು ಸಹಿಸಿಕೊಳ್ಳಬೇಕು.
31 ಯೆಹೋವನು ಜನರನ್ನು ಶಾಶ್ವತವಾಗಿ ತೊರೆದು ಬಿಡುವುದಿಲ್ಲ ಎಂಬುದು ಆ ವ್ಯಕ್ತಿಯ ನೆನಪಿನಲ್ಲಿರಬೇಕು.
32 ಯೆಹೋವನು ಶಿಕ್ಷಿಸುವಾಗ ಕರುಣೆಯುಳ್ಳವನೂ ಆಗಿರುತ್ತಾನೆ. ಆತನು ತನ್ನ ಮಹಾಪ್ರೀತಿ ಮತ್ತು ಕನಿಕರಗಳಿಂದಲೇ ಕರುಣೆಯುಳ್ಳವನಾಗಿರುತ್ತಾನೆ.
33 ತಾನು ಜನರನ್ನು ಶಿಕ್ಷಿಸಬೇಕೆಂಬುದು ಯೆಹೋವನ ಬಯಕೆಯೇನಲ್ಲ. ತಾನು ಜನರನ್ನು ವ್ಯಸನಗೊಳಿಸಬೇಕೆಂಬುದು ಆತನಿಗೆ ಇಷ್ಟವಿಲ್ಲ.
34 ಯೆಹೋವನು ಈ ಸಂಗತಿಗಳನ್ನು ಇಷ್ಟಪಡುವುದಿಲ್ಲ. ಯಾರೋ ಒಬ್ಬನು ಈ ಲೋಕದ ಕೈದಿಗಳನ್ನೆಲ್ಲಾ ತನ್ನ ಪಾದದ ಕೆಳಗೆ ಹಾಕಿ ತುಳಿಯುವುದನ್ನು ಆತನು ಇಷ್ಟಪಡುವುದಿಲ್ಲ.
35 ಒಬ್ಬನು ಮತ್ತೊಬ್ಬನಿಗೆ ಅನ್ಯಾಯ ಮಾಡುವುದನ್ನು ಆತನು ಇಷ್ಟಪಡುವುದಿಲ್ಲ. ಆದರೆ ಕೆಲವರು ಆ ಕೆಟ್ಟ ಕಾರ್ಯಗಳನ್ನು ಮಹೋನ್ನತನಾದ ಯೆಹೋವನ ಎದುರಿನಲ್ಲಿಯೇ ಮಾಡುತ್ತಾರೆ.
36 ವ್ಯಾಜ್ಯದಲ್ಲಿ ದೊರೆಯಬೇಕಾದ ನ್ಯಾಯವನ್ನು ದೊರೆಯದಂತೆ ಮಾಡುವುದು ಯೆಹೋವನಿಗೆ ಇಷ್ಟವಿಲ್ಲ. ಯೆಹೋವನು ಈ ಸಂಗತಿಗಳಲ್ಲಿ ಯಾವುದನ್ನೂ ಇಷ್ಟಪಡುವುದಿಲ್ಲ.
37 ಯಾರೇ ಆಗಲಿ ತಾವು ಮುಂತಿಳಿಸಿದ್ದನ್ನು ಯೆಹೋವನು ಆಜ್ಞಾಪಿಸದ ಹೊರತು ಅದು ನೆರವೇರುವುದಿಲ್ಲ.
38 ಒಳ್ಳೆಯವುಗಳೂ ಕೆಟ್ಟವುಗಳೂ ಸಂಭವಿಸುವಂತೆ ಮಹೋನ್ನತನಾದ ಯೆಹೋವನು ಆಜ್ಞಾಪಿಸುತ್ತಾನೆ.
39 ಜೀವಂತವಾಗಿರುವ ಯಾವ ವ್ಯಕ್ತಿಯೇ ಆಗಲಿ ತನ್ನ ಪಾಪಗಳ ನಿಮಿತ್ತ ಯೆಹೋವನ ಶಿಕ್ಷೆಗೆ ಗುರಿಯಾಗುವಾಗ ದೂರು ಹೇಳಕೂಡದು.
40 ನಾವು ಏನು ಮಾಡಿದ್ದೇವೆ ಎಂಬುದನ್ನು ಪರಿಶೀಲಿಸಿ ನೋಡೋಣ. ಬಳಿಕ ಯೆಹೋವನಿಗೆ ಅಭಿಮುಖರಾಗೋಣ.
41 ಪರಲೋಕದ ದೇವರಿಗೆ ನಮ್ಮ ಹೃದಯಗಳನ್ನೂ ಕೈಗಳನ್ನೂ ಎತ್ತಿ ಹಿಡಿಯೋಣ.
42 “ನಾವು ದಂಗೆ ಎದ್ದಿದ್ದೇವೆ ಮತ್ತು ಅವಿಧೇಯರಾಗಿದ್ದೇವೆ. ಆದ್ದರಿಂದ ನೀನು ನಮ್ಮನ್ನು ಕ್ಷಮಿಸಿಲ್ಲ.
43 ನೀನು ನಮಗೆ ನಿನ್ನ ಕೋಪವನ್ನು ಹೊದಿಸಿ ನಮ್ಮನ್ನು ಓಡಿಸಿಬಿಟ್ಟೆ. ನೀನು ನಮ್ಮನ್ನು ನಿಷ್ಕರುಣೆಯಿಂದ ಕೊಂದು ಹಾಕಿದೆ!
44 ನೀನು ನಿನಗೆ ಮೋಡಗಳನ್ನು ಹೊದಿಸಿಕೊಂಡು ನಮ್ಮ ಯಾವ ಪ್ರಾರ್ಥನೆಯೂ ನಿನ್ನ ಬಳಿಗೆ ಬಾರದಂತೆ ಮಾಡಿದೆ.
45 ನೀನು ನಮ್ಮನ್ನು ಇತರ ಜನಾಂಗಗಳಿಗೆ ಕಸದಂತೆಯೂ ಹೊಲಸಿನಂತೆಯೂ ಮಾಡಿದೆ.
46 ನಮ್ಮ ಶತ್ರುಗಳೆಲ್ಲಾ ನಮ್ಮೊಂದಿಗೆ ಕೋಪದಿಂದ ಮಾತಾಡುತ್ತಾರೆ.
47 ನಾವು ಭಯಗೊಂಡಿದ್ದೇವೆ. ನಾವು ಗುಂಡಿಯೊಳಗೆ ಬಿದ್ದಿದ್ದೇವೆ. ನಮಗೆ ಬಹಳವಾಗಿ ನೋವಾಗಿದೆ! ನಾವು ಮುರಿದುಹೋದವರಾಗಿದ್ದೇವೆ!”
48 ನನ್ನ ಕಣ್ಣೀರು ತೊರೆಗಳಂತೆ ಹರಿಯುತ್ತಿದೆ! ನನ್ನ ಜನರು ನಾಶವಾದ ಕಾರಣ ನಾನು ಗೋಳಾಡುತ್ತಿರುವೆ!
49 ನನ್ನ ಕಣ್ಣೀರು ಸತತವಾಗಿ ಹರಿಯುತ್ತಿದೆ! ನಾನು ಗೋಳಾಡುತ್ತಲೇ ಇರುವೆನು!
50 ಯೆಹೋವನೇ, ಕೆಳಗಿರುವ ನಮ್ಮನ್ನು ನೀನು ಬಗ್ಗಿ ನೋಡುವ ತನಕ ನಾನು ಗೋಳಾಡುತ್ತಲೇ ಇರುವೆನು! ನೀನು ಪರಲೋಕದಿಂದ ನಮ್ಮನ್ನು ನೋಡುವ ತನಕ ನಾನು ಗೋಳಾಡುತ್ತಲೇ ಇರುವೆನು.
51 ನನ್ನ ಪಟ್ಟಣದ ಯುವತಿಯರಿಗೆ ಸಂಭವಿಸಿದ್ದನ್ನು ನಾನು ನೋಡುವಾಗಲೆಲ್ಲ ನನ್ನ ಕಣ್ಣುಗಳು ನನ್ನನ್ನು ದುಃಖಗೊಳಿಸುತ್ತವೆ.
52 ನಿಷ್ಕಾರಣವಾಗಿ ಜನರು ನನ್ನ ವೈರಿಗಳಾಗಿದ್ದು ನನ್ನನ್ನು ಪಕ್ಷಿಯಂತೆ ಬೇಟೆಯಾಡಿದರು.

53 ನನ್ನ ಪ್ರಾಣವನ್ನು ಒಂದು ಗುಂಡಿಯಲ್ಲಿ ಕೊನೆ
ಗಾಣಿಸಲು ಅವರು ಪ್ರಯತ್ನಿಸಿದರು. ಅವರು
ನನಗೆ ಕಲ್ಲುಗಳನ್ನು ತೂರಿದರು.
54 ನೀರು ನನ್ನ ತಲೆಯ ಮೇಲೆ ಏರಿತು. ''ನಾನು ಸತ್ತು
ಹೋಗುತ್ತೇನೆ'' ಎಂದುಕೊಂಡೆನು.
55 ಯೆಹೋವನೇ, ಗುಂಡಿಯ ತಳದಿಂದ ನಾನು ನಿನ್ನ
ಹೆಸರೆತ್ತಿ ಪ್ರಾರ್ಥಿಸಿದೆನು.
56 ನೀನು ನನ್ನ ಸ್ವರವನ್ನು ಕೇಳಿದೆ. ನೀನು ನಿನ್ನ ಕಿವಿ
ಗಳನ್ನು ಮುಚ್ಚಿಕೊಳ್ಳಲಿಲ್ಲ; ನಿನ್ನನ್ನು ರಕ್ಷಿಸುವು
ದಿಲ್ಲ ಎನ್ನಲಿಲ್ಲ.
57 ನಾನು ನಿನ್ನನ್ನು ಕರೆದಾಗ, ನೀನು ಸಮೀಪಕ್ಕೆ
ಬಂದು, ''ಭಯಪಡದಿರು'' ಎಂದು ಹೇಳಿದೆ.
58 ಯೆಹೋವನೇ, ನೀನು ನನ್ನ ಪರವಾಗಿ ಹೋರಾ
ಡಿದೆ. ನನ್ನ ಪ್ರಾಣವನ್ನು ರಕ್ಷಿಸಿದೆ.
59 ಯೆಹೋವನೇ, ನನಗಾಗಿರುವ ಅನ್ಯಾಯವನ್ನು
ನೀನು ನೋಡಿರುವೆ. ವ್ಯಾಜ್ಯದಲ್ಲಿ ನನ್ನ ಪರವಾಗಿ
ತೀರ್ಪು ನೀಡು.
60 ನನ್ನ ಶತ್ರುಗಳು ನನ್ನ ಮೇಲೆ ಹೇಗೆ ಸೇಡನ್ನು ತೀರಿಸಿ
ಕೊಂಡಿದ್ದಾರೆ ನೋಡು. ನನಗೆ ವಿರೋಧವಾಗಿ
ಅವರು ಮಾಡಿದ ಎಲ್ಲಾ ಯೋಜನೆಗಳನ್ನು
ನೋಡು.
61 ಯೆಹೋವನೇ, ಅವರು ನನಗಾಡುವ ಗೇಲಿ
ಮಾತನ್ನು ಕೇಳು. ಅವರು ನನ್ನ ವಿರುದ್ಧ ಮಾಡಿದ್ದ
ಎಲ್ಲಾ ಯೋಜನೆಗಳನ್ನು ಕೇಳು.
62 ನನ್ನ ಶತ್ರುಗಳ ಮಾತುಗಳು ಮತ್ತು ಆಲೋಚನೆ
ಗಳು ಯಾವಾಗಲೂ ನನಗೆ ವಿರೋಧವಾಗಿವೆ.
63 ಯೆಹೋವನೇ ನೋಡು! ಅವರು ಕುಳಿತು
ಕೊಂಡಿರುವಾಗಲೂ ನಿಂತುಕೊಂಡಿರುವಾಗಲೂ
ನನ್ನನ್ನು ಹೇಗೆ ಗೇಲಿ ಮಾಡುತ್ತಾರೆ!
64 ಯೆಹೋವನೇ, ನೀನು ಅವರಿಗೆ ಮುಯ್ಯಿ
ತೀರಿಸು! ಅವರು ಮಾಡಿರುವುದಕ್ಕೆ ತಕ್ಕಂತೆ ಅವ
ರನ್ನು ದಂಡಿಸು!
65 ಅವರ ಹೃದಯವನ್ನು ಕಠಿಣಗೊಳಿಸು! ಬಳಿಕ
ಅವರನ್ನು ಶಪಿಸು!
66 ಕೋಪದಿಂದ ಅವರನ್ನು ಓಡಿಸಿಬಿಡು! ಅವರನ್ನು
ನಾಶಮಾಡು! ಯೆಹೋವನೇ, ಅವರನ್ನು ಈ
ಭೂಲೋಕದಿಂದಲೇ ಅಳಿಸಿಹಾಕು!

### ಜೆರುಸಲೇಮಿನ ಮೇಲೆ ಭಯಂಕರ ಆಕ್ರಮಣ

4 ನೋಡು ಬಂಗಾರವು ಹೇಗೆ ಕಪ್ಪಾಗಿದೆ. ನೋಡು,
ಶುದ್ಧ ಬಂಗಾರವು ಹೇಗೆ ಬದಲಾಗಿದೆ. ಅಮೂಲ್ಯ
ವಾದ ಕಲ್ಲುಗಳು ಎಲ್ಲೆಲ್ಲಿಯೂ ಚೆಲ್ಲಾಪಿಲ್ಲಿ ಯಾಗಿ
ಬಿದ್ದಿವೆ. ಅವು ಪ್ರತಿಯೊಂದು ಬೀದಿಯ
ಕೊನೆಯಲ್ಲಿಯೂ ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ.
2 ಚೀಯೋನಿನ ಜನರು ಬಂಗಾರದಂತೆ ಅಮೂಲ್ಯ
ವಾಗಿದ್ದರು. ಆದರೆ ಈಗ ವೈರಿಗಳು ಅವರನ್ನು
ಕುಂಬಾರನಿಂದ ಮಾಡಲ್ಪಟ್ಟಿರುವ ಜೇಡಿ
ಮಣ್ಣಿನ ಹಳೆಯ ಮಡಕೆಗಳೊ ಎಂಬಂತೆ
ಪರಿಗಣಿಸಿದ್ದಾರೆ.
3 ಕಾಡುನಾಯಿಯು ಸಹ ತನ್ನ ಮರಿಗಳಿಗೆ ಹಾಲನ್ನು
ಕುಡಿಸುತ್ತದೆ. ನರಿಯು ಸಹ ತನ್ನ ಮರಿಗಳಿಗೆ
ಮೊಲೆಗಳಿಂದ ಹಾಲನ್ನು ಕೊಡುತ್ತದೆ. ಆದರೆ ನನ್ನ
ಜನರಾದರೋ ಮರುಭೂಮಿಯಲ್ಲಿ ಜೀವಿಸುವ
ಉಷ್ಟ್ರಪಕ್ಷಿಯಂತೆ ಕ್ರೂರಿಗಳಾಗಿದ್ದಾರೆ.
4 ಎಳೆಗೂಸಿನ ನಾಲಿಗೆಯು ಬಾಯಾರಿಕೆಯಿಂದ
ಅಂಗಳಿಗೆ ಅಂಟಿಕೊಳ್ಳುತ್ತದೆ. ಎಳೆಯ ಮಕ್ಕಳು
ರೊಟ್ಟಿಯನ್ನು ಕೇಳಿದರೆ ಅವರಿಗೆ ಯಾರೂ ಏನೂ
ಕೊಡುವುದಿಲ್ಲ.
5 ಒಂದು ಕಾಲದಲ್ಲಿ ಮೃಷ್ಟಾನ್ನವನ್ನು ತಿಂದ ಜನರು
ಈಗ ಬೀದಿಗಳಲ್ಲಿ ಸಾಯುತ್ತಿದ್ದಾರೆ. ಸುಂದರ
ವಾದ ಕೆಂಪು ಉಡುಪುಗಳನ್ನು ಧರಿಸಿಕೊಂಡು
ಬೆಳೆದ ಜನರು ಈಗ ಕಸದ ಗುಂಡಿಗಳಿಂದ ಆಹಾರ
ವನ್ನು ಎತ್ತಿಕೊಳ್ಳುತ್ತಿದ್ದಾರೆ.
6 ನನ್ನ ಜನರ ಪಾಪವು ಬಹಳವಾಗಿತ್ತು. ಅವರ
ಪಾಪವು ಸೋದೋಮ್ ಪಟ್ಟಣದ ಪಾಪ
ಕ್ಕಿಂತಲೂ ಹೆಚ್ಚಾಗಿತ್ತು. ಸೋದೋಮ್ ಇದ್ದಕ್ಕಿ
ದ್ದಂತೆ ನಾಶವಾಯಿತು. ಅದು ನಾಶವಾದದ್ದು
ಯಾವ ಮಾನವನಿಂದಲೂ ಅಲ್ಲ.
7 ಯೆಹೂದದ ಕೆಲವು ಜನರು ದೇವರಿಗೆ ವಿಶೇಷ
ವಾದ ರೀತಿಯಲ್ಲಿ ಸಮರ್ಪಿತರಾಗಿದ್ದರು. ಅವರು
ಬಹಳ ಶುದ್ಧರಾಗಿದ್ದರು. ಅವರು ಹಿಮಕ್ಕಿಂತಲೂ
ಹಾಲಿಗಿಂತಲೂ ಬಿಳುಪಾಗಿದ್ದರು. ಅವರ ದೇಹ
ಗಳು ಹವಳದಂತೆ ಕೆಂಪಾಗಿದ್ದವು. ಅವರ ಗಡ್ಡಗಳು
ಇಂದ್ರನೀಲಮಣಿಯಂತಿದ್ದವು.
8 ಆದರೆ ಈಗ ಅವರ ಮುಖಗಳು ಕಪ್ಪು ಹೊಗೆ
ಗಿಂತಲೂ ಕಪ್ಪಾಗಿವೆ. ಅವರನ್ನು ಬೀದಿಗಳಲ್ಲಿ
ಯಾರೂ ಸಹ ಗುರುತಿಸುವುದಿಲ್ಲ. ಅವರ
ಚರ್ಮವು ಅವರ ಮೂಳೆಗಳ ಮೇಲೆ ಸುಕ್ಕು
ಗೊಂಡಿದೆ. ಅವರ ಚರ್ಮವು ಮರದಂತಾಗಿದೆ.
9 ಬರಗಾಲದ ನಿಮಿತ್ತ ಸತ್ತವರಿಗಿಂತಲೂ ಖಡ್ಗಗ
ಳಿಂದ ಹತರಾದವರ ಸಾವೇ ಮೇಲಾಗಿತ್ತು. ಹಸಿವೆ
ಯಿಂದಿದ್ದ ಜನರು ನೋವಿನಿಂದ ನರಳಾಡಿದರು.
ಭೂಮಿಯಿಂದ ಆಹಾರವನ್ನು ಪಡೆಯಲಾಗದೆ
ಅವರು ಸತ್ತುಹೋದರು.

10 ಆ ಸಮಯದಲ್ಲಿ, ಕನಿಕರವುಳ್ಳ ಸ್ತ್ರೀಯರು ಸಹ
ತಮ್ಮ ಮಕ್ಕಳನ್ನೇ ಬೇಯಿಸಿ ತಿಂದುಬಿಟ್ಟರು. ಆ
ಮಕ್ಕಳು ಅವರ ತಾಯಂದಿರಿಗೇ ಆಹಾರವಾದರು.
ನನ್ನ ಜನರು ನಾಶಗೊಂಡಾಗ ಇದು ಸಂಭವಿಸಿತು.
11 ಯೆಹೋವನು ತನ್ನ ಕೋಪವನ್ನೆಲ್ಲ ಉಪಯೋಗಿ
ಸಿದನು. ತನ್ನ ಕೋಪವನ್ನೆಲ್ಲಾ ಸುರಿದುಬಿಟ್ಟನು.
ಆತನು ಚೀಯೋನಿನಲ್ಲಿ ಬೆಂಕಿ ಹೊತ್ತಿಸಿದನು. ಆ
ಬೆಂಕಿಯು ಚೀಯೋನಿನ ಅಡಿಪಾಯಗಳವರೆಗೂ
ದಹಿಸಿಬಿಟ್ಟಿತು.
12 ನಡೆದಿದ್ದ ಸಂಗತಿಯನ್ನು ನಂಬುವುದಕ್ಕೂ
ಭೂಲೋಕದ ರಾಜರಿಗೆ ಆಗಲಿಲ್ಲ. ನಡೆದಿದ್ದ
ಸಂಗತಿಯನ್ನು ನಂಬುವುದಕ್ಕೂ ಲೋಕದ ಜನ
ರಿಗೆ ಆಗಲಿಲ್ಲ. ಜೆರುಸಲೇಮ್ ಪಟ್ಟಣದ ಬಾಗಿಲು
ಗಳ ಮೂಲಕ ವೈರಿಗಳು ಬಂದರೆಂಬುದನ್ನು
ಅವರಿಗೆ ನಂಬಲೂ ಆಗಲಿಲ್ಲ.
13 ಜೆರುಸಲೇಮಿನ ಪ್ರವಾದಿಗಳು ಪಾಪ ಮಾಡಿದ್ದ
ರಿಂದಲೇ ಇದು ಸಂಭವಿಸಿತು. ಜೆರುಸಲೇಮಿನ
ಯಾಜಕರು ದುಷ್ಕೃತ್ಯಗಳನ್ನು ಮಾಡಿದ್ದದ
ರಿಂದಲೇ ಇದು ಸಂಭವಿಸಿತು. ಆ ಜನರು ಜೆರುಸ
ಲೇಮ್ ಪಟ್ಟಣದಲ್ಲಿ ಒಳ್ಳೆಯ ಜನರ ರಕ್ತವನ್ನು
ಸುರಿಸಿದ್ದರು.
14 ಆದ್ದರಿಂದ ಆ ಪ್ರವಾದಿಗಳು ಮತ್ತು ಯಾಜಕರು
ಕುರುಡರಂತೆ ಬೀದಿಗಳಲ್ಲಿ ಅಲೆದಾಡಿದರು.
ಅವರು ರಕ್ತದಿಂದ ಹೊಲಸಾಗಿದ್ದರು. ಅವರು
ಹೊಲಸಾಗಿದ್ದದರಿಂದ ಅವರ ಬಟ್ಟೆಯನ್ನು
ಮುಟ್ಟುವುದಕ್ಕೂ ಯಾರಿಗೂ ಸಾಧ್ಯವಿರಲಿಲ್ಲ.

15 ‘‘ತೊಲಗಿ ಹೋಗಿ! ತೊಲಗಿ ಹೋಗಿ! ನಮ್ಮನ್ನು
ಮುಟ್ಟಬೇಡಿ’’ ಎಂದು ಜನರು ಕೂಗಿಕೊಂಡರು.
ಆ ಜನರು ಅಲೆದಾಡುತ್ತಿದ್ದರು. ಅವರಿಗೆ ಸ್ಥಳ
ವಿರಲಿಲ್ಲ. ಬೇರೆ ಜನಾಂಗಗಳ ಜನರು, ‘‘ಅವರು
ನಮ್ಮೊಂದಿಗೆ ವಾಸಿಸುವುದು ನಮಗೆ ಬೇಕಿಲ್ಲ’’
ಎಂದು ಹೇಳಿದರು.
16 ಯೆಹೋವನು ತಾನೇ ಆ ಜನರನ್ನು ನಾಶ
ಮಾಡಿದನು. ಅವರ ಪರಿಪಾಲನೆ ಮಾಡುವುದನ್ನು
ನಿಲ್ಲಿಸಿದನು. ಆತನು ಯಾಜಕರನ್ನು ಗೌರವಿಸ
ಲಿಲ್ಲ. ಆತನು ಯೆಹೂದದ ಹಿರಿಯರೊಂದಿಗೆ
ಸ್ನೇಹದಿಂದಿರಲಿಲ್ಲ.
17 ಸಹಾಯಕ್ಕಾಗಿ ಎದುರುನೋಡುತ್ತಾ ನಮ್ಮ
ಕಣ್ಣುಗಳು ಮೊಬ್ಬಾದವು. ಆದರೆ ಯಾವ
ಸಹಾಯವೂ ಬರುವುದಿಲ್ಲ. ಯಾವ ಜನಾಂಗ
ವಾದರೂ ಬಂದು ನಮ್ಮನ್ನು ರಕ್ಷಿಸುವುದೇನೋ
ಎಂದು ಕೋವರದಲ್ಲಿ ನೋಡುತ್ತಲೇ ಇದ್ದೆವು.
ಆದರೆ ಯಾವ ಜನಾಂಗವೂ ಬರಲಿಲ್ಲ.
18 ನಮ್ಮ ವೈರಿಗಳು ನಮ್ಮನ್ನು ಸತತವಾಗಿ ಬೇಟೆ
ಯಾಡುತ್ತಿದ್ದುದರಿಂದ ನಾವು ಬೀದಿಗಳಿಗೆ
ಹೋಗಲೂ ಸಾಧ್ಯವಾಗಲಿಲ್ಲ. ನಮ್ಮ ಅಂತ್ಯವು
ಸಮೀಪಿಸಿತು. ನಮ್ಮ ಕಾಲವು ಮುಗಿಯಿತು. ನಮ್ಮ
ಕೊನೆಯು ಬಂದಿತು!
19 ನಮ್ಮನ್ನು ಅಟ್ಟಿಸಿಕೊಂಡು ಬಂದ ಜನರು ಆಕಾಶ
ದಲ್ಲಿ ಹಾರುವ ಹದ್ದುಗಳಿಗಿಂತಲೂ ವೇಗಶಾಲಿ
ಯಾಗಿದ್ದರು. ಅವರು ನಮ್ಮನ್ನು ಬೆಟ್ಟಗಳಿಗೆ ಅಟ್ಟಿಸಿ
ಕೊಂಡು ಬಂದರು. ನಮ್ಮನ್ನು ಹಿಡಿಯುವುದ
ಕ್ಕಾಗಿ ಮರುಭೂಮಿಯಲ್ಲಿ ಅವಿತುಕೊಂಡರು.
20 ನಮಗೆ ರಾಜನು ಬಹಳ ಮುಖ್ಯವಾಗಿದ್ದನು.
ಅವನು ನಮಗೆ ಉಸಿರಿನಷ್ಟೇ ಅಮೂಲ್ಯವಾಗಿ
ದ್ದನು. ಆದರೆ ಅವರು ರಾಜನನ್ನೇ ಸೆರೆಹಿಡಿದರು.
ಯೆಹೋವನೇ ಆ ರಾಜನನ್ನು ಆರಿಸಿಕೊಂಡಿ
ದ್ದನು. ‘‘ನಾವು ಅವನ ನೆರಳಿನಲ್ಲಿ ಬದುಕುತ್ತೇವೆ
ಅವನು ನಮ್ಮನ್ನು ಜನಾಂಗಗಳವರಿಂದ ಸಂರಕ್ಷಿಸು
ವನು’’ ಎಂದು ನಾವು ರಾಜನ ಬಗ್ಗೆ ಹೇಳಿ
ಕೊಂಡಿದ್ದೆವು.

21 ‘‘ಎದೋಮಿನ ಜನರೇ, ಸಂತೋಷವಾಗಿರಿ.
ಊಚ್ ದೇಶದಲ್ಲಿ ವಾಸವಾಗಿರುವ ಜನರೇ,
ಸಂತೋಷವಾಗಿರಿ. ಆದರೆ ಜ್ಞಾಪಕದಲ್ಲಿಟ್ಟು
ಕೊಂಡಿರಿ, ಯೆಹೋವನ ಕೋಪದ ಪಾತ್ರೆಯು
ನಿಮ್ಮ ಬಳಿಗೂ ಬರುವುದು. ನೀವು ಆ ಪಾತ್ರೆ
ಯಿಂದ ಕುಡಿಯುವಾಗ ಮತ್ತೇರಿದವರಾಗಿ
ನಿಮ್ಮನ್ನು ನೀವೇ ಬೆತ್ತಲು ಮಾಡಿಕೊಳ್ಳುವಿರಿ.
22 ಚೀಯೋನೇ, ನಿನಗಾಗ ಬೇಕಿದ್ದ ದಂಡನೆಯು
ಸಂಪೂರ್ಣವಾಯಿತು. ಮತ್ತೆ ನೀನು ಸೆರೆವಾಸಕ್ಕೆ
ಹೋಗುವುದಿಲ್ಲ. ಆದರೆ ಎದೋಮಿನ ಜನರೇ,
ನಿಮ್ಮ ಪಾಪಗಳಿಗಾಗಿ ಯೆಹೋವನು ನಿಮ್ಮನ್ನು
ದಂಡಿಸುವನು. ಆತನು ನಿಮ್ಮ ಪಾಪಗಳನ್ನು ಬಹಿ
ರಂಗಪಡಿಸುವನು.

### ಯೆಹೋವನಿಗೆ ಪ್ರಾರ್ಥನೆ

5 ಯೆಹೋವನೇ, ನಮಗೆ ಸಂಭವಿಸಿದ್ದನ್ನು
ಜ್ಞಾಪಿಸಿಕೊ. ನಮಗಾಗಿರುವ ಅವಮಾನವನ್ನು
ನೋಡು.
2 ನಮ್ಮ ದೇಶವು ಬೇರೆ ಜನಾಂಗಗಳವರ
ಪಾಲಾಗಿದೆ. ನಮ್ಮ ಮನೆಗಳು ಪರದೇಶಿಗಳಿಗೆ
ಕೊಡಲ್ಪಟ್ಟಿವೆ.

3 ನಾವು ಅನಾಥರಾಗಿದ್ದೇವೆ. ನಮಗೆ ತಂದೆಯೇ
ಇಲ್ಲ. ನಮ್ಮ ತಾಯಂದಿರು ವಿಧವೆ
ಗಳಂತಾಗಿದ್ದಾರೆ.
4 ನಾವು ಕುಡಿಯುವ ನೀರನ್ನೂ ನಾವು ಕೊಂಡು
ಕೊಳ್ಳಬೇಕಾಗಿದೆ. ನಮ್ಮ ಸೌದೆಗೂ ಸಹ ನಾವು
ಹಣ ಕೊಡಬೇಕಾಗಿದೆ.
5 ಮರಣದವರೆಗೂ ನಾವು ಹಿಂದಟ್ಟಲ್ಪಟ್ಟಿದ್ದೇವೆ.
ನಾವು ಬಳಲಿ ಹೋಗಿದ್ದೇವೆ; ನಾವು ವಿಶ್ರಾಂತಿ
ಯನ್ನೇ ಪಡೆದಿಲ್ಲ.
6 ನಾವು ಈಜಿಪ್ಟಿನೊಡನೆ ಒಂದು ಒಪ್ಪಂದವನ್ನು
ಮಾಡಿಕೊಂಡೆವು. ಸಾಕಷ್ಟು ಆಹಾರಕ್ಕಾಗಿ ನಾವು
ಅಸ್ಸೀರಿಯಾದೊಡನೆ ಒಪ್ಪಂದ ಮಾಡಿಕೊಂಡೆವು.
7 ನಮ್ಮ ಪೂರ್ವಿಕರು ನಿನಗೆ ವಿರೋಧವಾಗಿ ಪಾಪ
ಮಾಡಿದರು. ಈಗ ಅವರು ಸತ್ತುಹೋಗಿದ್ದಾರೆ.
ಆದರೆ ಅವರ ಪಾಪಗಳ ನಿಮಿತ್ತ ನಾವು ಈಗ ಸಂಕಟ
ಪಡುತ್ತಿದ್ದೇವೆ.
8 ಗುಲಾಮರು ನಮ್ಮ ಅಧಿಪತಿಗಳಾಗಿದ್ದಾರೆ.
ನಮ್ಮನ್ನು ಯಾರೂ ಅವರಿಂದ ರಕ್ಷಿಸಲಾರರು.
9 ಆಹಾರಕ್ಕಾಗಿ ನಾವು ನಮ್ಮ ಪ್ರಾಣಗಳನ್ನೇ ಆಪತ್ತಿಗೆ
ಗುರಿಮಾಡಿಕೊಳ್ಳುತ್ತೇವೆ. ಊರ ಹೊರಗೆ ಖಡ್ಗ
ಗಳನ್ನು ಹಿಡಿದುಕೊಂಡಿರುವ ಜನರಿದ್ದಾರೆ.
10 ನಮ್ಮ ಚರ್ಮವು ಒಲೆಯಂತೆ ಬಿಸಿಯಾಗಿದೆ. ಹಸಿವೆ
ಯಿಂದಾಗಿ ಜ್ವರವು ನಮ್ಮನ್ನು ಸುಡುತ್ತಿದೆ.

11 “ಚೀಯೋನಿನ ಸ್ತ್ರೀಯರನ್ನು ವೈರಿಗಳು ಅತ್ಯಾಚಾರ
ಮಾಡಿದ್ದಾರೆ. ಯೆಹೂದದ ಪಟ್ಟಣಗಳಲ್ಲಿ ಅವರು
ಕನ್ನಿಕೆಯರನ್ನು ಅತ್ಯಾಚಾರ ಮಾಡಿದ್ದಾರೆ.
12 ವೈರಿಗಳು ನಮ್ಮ ರಾಜಕುಮಾರರನ್ನು ಗಲ್ಲಿಗೇರಿಸಿ
ದ್ದಾರೆ. ಅವರು ನಮ್ಮ ಹಿರಿಯರಿಗೆ ಗೌರವ
ಕೊಡಲಿಲ್ಲ.
13 ನಮ್ಮ ಯುವಕರನ್ನು ಬೀಸುವ ಕಲ್ಲುಗಳಿಂದ
ದವಸ ಧಾನ್ಯಗಳನ್ನು ಬೀಸುವವರನ್ನಾಗಿ ವೈರಿಗಳು
ಮಾಡಿದರು. ನಮ್ಮ ಯುವಕರು ಶ್ರಮದ
ಕೆಲಸದಿಂದ ಮುಗ್ಗರಿಸಿದ್ದಾರೆ.
14 ಪಟ್ಟಣದ ದ್ವಾರಗಳ ಬಳಿಯಿಂದ ಹಿರಿಯರು
ಹೊರಟು ಹೋಗಿದ್ದಾರೆ. ಯುವಕರು ಸಂಗೀತ
ನುಡಿಸುವುದನ್ನು ನಿಲ್ಲಿಸಿದ್ದಾರೆ.
15 ನಮ್ಮ ಹೃದಯಗಳಲ್ಲಿ ಆನಂದವೇ ಉಳಿದಿಲ್ಲ.
ನಮ್ಮ ನರ್ತನದ ಸ್ಥಾನವನ್ನು ಗೋಳಾಟವು ಆವರಿಸಿ
ಕೊಂಡಿದೆ.
16 ನಮ್ಮ ತಲೆಯಿಂದ ಕಿರೀಟವು ಬಿದ್ದುಹೋಗಿದೆ.
ನಾವು ಪಾಪ ಮಾಡಿದ್ದರಿಂದಲೇ ನಮಗೆ ಕೇಡುಗ
ಳಾಗಿವೆ.

17 “ಇವುಗಳ ದೆಸೆಯಿಂದಾಗಿ ನಮ್ಮ ಹೃದಯಗಳು ಎಡ
ಬಿಡದೆ ನೋಯುತ್ತಿವೆ. ನಮ್ಮ ಕಣ್ಣುಗಳು ಸರಿ
ಯಾಗಿ ಕಾಣದಂತಾಗಿವೆ.
18 ಚೀಯೋನ್ ಪರ್ವತವು ನಿರ್ಜನ ಪ್ರದೇಶ
ವಾಗಿದೆ. ಚೀಯೋನ್ ಪರ್ವತದ ಸುತ್ತಮುತ್ತಲೆಲ್ಲ
ನರಿಗಳು ಓಡಾಡುತ್ತವೆ.
19 ಯೆಹೋವನೇ, ನೀನಾದರೋ ಶಾಶ್ವತವಾಗಿ
ಆಳುವೆ. ನಿನ್ನ ರಾಜಸಿಂಹಾಸನವು ಸದಾಕಾಲ
ವಿರುವುದು.
20 ಯೆಹೋವನೇ, ನೀನು ನಮ್ಮನ್ನು ಮರೆತಿರುವು
ದೇಕೆ? ನೀನು ನಮ್ಮನ್ನು ದೀರ್ಘಕಾಲದವರೆಗೆ
ತೊರೆದು ಬಿಟ್ಟಿರುವುದೇಕೆ?

21 “ಯೆಹೋವನೇ, ನಮ್ಮನ್ನು ನಿನ್ನ ಬಳಿಗೆ ಮತ್ತೆ ಬರ
ಮಾಡಿಕೋ. ನಾವು ಸಂತೋಷದಿಂದ ನಿನ್ನ ಬಳಿಗೆ
ಬರುತ್ತೇವೆ. ನಮ್ಮ ಜೀವಿತಗಳನ್ನು ಮೊದಲಿನ
ಸ್ಥಿತಿಗೆ ಬರಮಾಡು.
22 ನೀನು ನಮ್ಮನ್ನು ಸಂಪೂರ್ಣವಾಗಿ ತಿರಸ್ಕರಿಸಿರು
ವಿಯಾ? ನೀನು ನಮ್ಮ ಮೇಲೆ ಬಹಳವಾಗಿ
ಕೋಪಗೊಂಡಿರುವೆ.

# ಯೆಹೆಜ್ಕೇಲ

1 1-3ನಾನು ಯಾಜಕನಾಗಿದ್ದೇನೆ. ನಾನು ಬೂಜಿಯ
ಮಗನಾದ ಯೆಹಜ್ಕೇಲ. ನಾನು ಬಾಬಿಲೋನಿನಲ್ಲಿ
ಯೆಹೂದ್ಯರೊಂದಿಗೆ ಸೆರೆಯಲ್ಲಿದ್ದೆ. ನಾನು ಕೆಬಾರ್
ಕಾಲುವೆಯ ಬಳಿಯಲ್ಲಿದ್ದಾಗ ಆಕಾಶ ತೆರೆದಿರುವದನ್ನು
ಕಂಡೆನು. ನನಗೆ ದೈವದರ್ಶನವಾಯಿತು. ಇದು ಮೂವ
ತ್ತನೆಯ ವರುಷದ ನಾಲ್ಕನೆಯ ತಿಂಗಳಿನ ಐದನೆ ದಿವಸ
ದಲ್ಲಾಯಿತು. ಒಡೆಯನಾದ ಒಡೆಯನಾದ

ಯೆಹೋಯಾಖೀನನು ಸೆರೆಯಲ್ಲಿದ್ದ ಐದನೆಯ
ವರುಷದ ನಾಲ್ಕನೆ ತಿಂಗಳಿನ ಐದನೆಯ ದಿವಸದಲ್ಲಿ
ಯೆಹೋವನ ವಾಕ್ಯವು ಯೆಹೆಜ್ಕೇಲನಿಗೆ ಬಂದಿತು. ಆ ಸ್ಥಳ
ದಲ್ಲಿ ಯೆಹೋವನ ಆತ್ಮನಿಂದ ಅವನು ಪರವಶನಾದನು.

### ಯೆಹೋವನ ರಥ– ದೇವರ ಸಿಂಹಾಸನ

4ಉತ್ತರ ದಿಕ್ಕಿನಿಂದ ಒಂದು ದೊಡ್ಡ ಬಿರುಗಾಳಿ
ಬರುವದನ್ನು ಯೆಹೆಜ್ಕೇಲನಾದ ನಾನು ನೋಡಿದೆನು.
ಬಿರುಗಾಳಿಯೊಡನೆ ಕೂಡಿದ ಒಂದು ದೊಡ್ಡ ಮೋಡವು
ಅಲ್ಲಿತ್ತು. ಅದರಿಂದ ಬೆಂಕಿಯು ಪ್ರಜ್ವಲಿಸುತ್ತಿತ್ತು.
ಮೋಡದ ಸುತ್ತಲೂ ಬೆಳಕಿತ್ತು. ಬೆಂಕಿಯ ಮಧ್ಯದಲ್ಲಿ
ಕಾದಲೋಹದಂತೆ ಹೊಳೆಯುತ್ತಿದ್ದ ಏನನ್ನೊ ಕಂಡೆನು.
5ಆ ಮೋಡದೊಳಗೆ ಮನುಷ್ಯರನ್ನು ಹೋಲುವ ನಾಲ್ಕು
ಜೀವಿಗಳಿದ್ದವು. 6ಆ ಜೀವಿಗಳಲ್ಲಿ ಪ್ರತಿಯೊಂದಕ್ಕೂ
ನಾಲ್ಕು ಮುಖಗಳೂ ನಾಲ್ಕು ರೆಕ್ಕೆಗಳೂ ಇದ್ದವು.
7ಅವುಗಳ ಕಾಲುಗಳು ನೆಟ್ಟಗಿದ್ದವು. ಅವುಗಳ ಪಾದಗಳು
ಹಸುವಿನ ಗೊರಸಿನಂತಿದ್ದವು. ಅವು ಚೆನ್ನಾಗಿ ಬೆಳಗಿದ
ತಾಮ್ರದಂತೆ ಹೊಳೆಯುತ್ತಿದ್ದವು. 8ಒಂದೊಂದು
ಜೀವಿಯ ನಾಲ್ಕು ಪಾರ್ಶ್ವಗಳಲ್ಲಿನ ರೆಕ್ಕೆಗಳ ಕೆಳಗೆ
ಮನುಷ್ಯನ ತೋಳುಗಳೂ ಕೈಗಳೂ ಇದ್ದವು. ನಾಲ್ಕು
ಜೀವಿಗಳಿಗೆ ಮುಖಗಳೂ ರೆಕ್ಕೆಗಳೂ ಈ ರೀತಿಯಲ್ಲಿದ್ದವು;
9ಆ ರೆಕ್ಕೆಗಳು ಒಂದಕ್ಕೊಂದು ತಾಕಿದ್ದವು. ಆ ಜೀವಿಗಳು
ಚಲಿಸುವಾಗ ಆಚೀಚೆ ತಿರುಗುತ್ತಿರಲಿಲ್ಲ. ತಮ್ಮ
ದೃಷ್ಟಿಯಿದ್ದ ಕಡೆಗೆ ನೆಟ್ಟಗೆ ಹೋದವು.

10ಪ್ರತೀ ಜೀವಿಗೆ ನಾಲ್ಕು ಮುಖಗಳಿದ್ದವು. ಮುಂಭಾ
ಗದಲ್ಲಿ ಮನುಷ್ಯನ ಮುಖ, ಬಲಬದಿಯಲ್ಲಿ ಸಿಂಹದ
ಮುಖ, ಎಡಬದಿಯಲ್ಲಿ ಹೋರಿಯ ಮುಖ, ಹಿಂಬದಿ
ಯಲ್ಲಿ ಗರುಡನ ಮುಖ. 11ಒಂದೊಂದು ಜೀವಿಯ
ಎರಡು ರೆಕ್ಕೆಗಳು ಮತ್ತೊಂದು ಜೀವಿಯ ರೆಕ್ಕೆಯನ್ನು
ತಾಗುತ್ತಿದ್ದವು ಮತ್ತು ಉಳಿದೆರಡು ರೆಕ್ಕೆಗಳು ಅದರ
ದೇಹವನ್ನು ಆವರಿಸಿಕೊಂಡಿದ್ದವು. 12ಆ ಜೀವಿಗಳು
ಯಾವ ದಿಕ್ಕಿಗೆ ನೋಡುತ್ತಿದ್ದವೋ ಅದೇ ಕಡೆಗೆ ಹೋಗು
ತ್ತಿದ್ದವು. ದೇವರಾತ್ಮನು ಅವುಗಳನ್ನು ಯಾವ ಕಡೆಗೆ ನಡೆಸು
ತ್ತಾನೋ ಆ ದಿಕ್ಕಿಗೆ ಅವು ಹೋದವು. ಆದರೆ ಹೋಗುತ್ತಿ
ರುವಾಗ ಅವುಗಳು ತಿರುಗಲಿಲ್ಲ. 13ಆ ಜೀವಿಗಳ ಮಧ್ಯ
ದಲ್ಲಿ ಉರಿಯುವ ಕೆಂಡಗಳಂತೆ ಕಾಣುತ್ತಿದ್ದ ಏನೋ
ಇತ್ತು. ಈ ಬೆಂಕಿಯು ಸಣ್ಣ ದೀವಟಿಗೆಗಳಂತೆ ಜೀವಿಗಳ
ಮಧ್ಯೆ ಸಂಚರಿಸುತ್ತಿದ್ದವು. ಆ ಬೆಂಕಿಯು ಪ್ರಕಾಶಮಾನ
ವಾಗಿದ್ದು ಅದರೊಳಗಿಂದ ಮಿಂಚು ಹೊರಡುತ್ತಿದ್ದವು.
14ಆ ಮಿಂಚಿನ ವೇಗದಂತೆ ಜೀವಿಗಳು ಆಚೀಚೆ
ಓಡಾಡುತ್ತಿದ್ದವು.

15-16ಆ ಜೀವಿಗಳನ್ನು ನಾನು ನೋಡುತ್ತಿರುವಾಗ,
ನೆಲಕ್ಕೆ ತಾಕಿದ್ದ ನಾಲ್ಕು ಚಕ್ರಗಳನ್ನು ಕಂಡೆನು.
ಒಂದೊಂದು ಜೀವಿಯ ಪಕ್ಕದಲ್ಲಿ ಒಂದೊಂದು ಚಕ್ರಗ
ಳಿದ್ದವು. ಆ ಎಲ್ಲಾ ಚಕ್ರಗಳು ಒಂದೇ ಪ್ರಕಾರವಾಗಿ ಕಾಣು
ತ್ತಿದ್ದವು. ಅವುಗಳು ಹೊಳೆಯುವ ಹಳದಿ ಬಣ್ಣದ ರತ್ನಗ
ಳಿಂದ ಮಾಡಲ್ಪಟ್ಟಂತೆ ತೋರುತ್ತಿದ್ದವು. ಆ ಚಕ್ರದೊಳಗೆ
ಇನ್ನೊಂದು ಚಕ್ರವಿದ್ದಂತೆ ತೋರುತ್ತಿತ್ತು. 17ಆ ಚಕ್ರಗಳು
ನಾಲ್ಕು ದಿಕ್ಕುಗಳಲ್ಲಿ ಯಾವ ದಿಕ್ಕಿಗೆ ಬೇಕಾದರೂ ತಿರುಗ
ಬಲ್ಲವುಗಳಾಗಿದ್ದವು. ಆದರೆ ಜೀವಿಗಳು ಚಲಿಸುತ್ತಿರು
ವಾಗ ಅವು ತಿರುಗುತ್ತಿರಲಿಲ್ಲ.

18ಚಕ್ರಗಳ ಅಂಚು ಎತ್ತರವಾಗಿದ್ದು ಭಯಾನಕವಾಗಿ
ಕಾಣುತ್ತಿದ್ದವು. ಆ ನಾಲ್ಕು ಚಕ್ರಗಳ ಅಂಚುಗಳ ತುಂಬ
ಕಣ್ಣುಗಳಿದ್ದವು.

19ಚಕ್ರಗಳು ಜೀವಿಗಳೊಂದಿಗೆ ಯಾವಾಗಲೂ ಚಲಿಸು
ತ್ತಿದ್ದವು. ಜೀವಿಗಳು ಗಾಳಿಯಲ್ಲಿ ಹಾರಾಡುತ್ತಿದ್ದರೆ, ಚಕ್ರ
ಗಳು ಸಹ ಅವುಗಳ ಜೊತೆಯಲ್ಲಿಯೇ ಚಲಿಸುತ್ತಿದ್ದವು.
20ದೇವರಾತ್ಮನು ನಡೆಸಿದ ಕಡೆಗೆ ಜೀವಿಗಳು ಹೋದವು.
ಚಕ್ರಗಳು ಸಹ ಅವುಗಳೊಂದಿಗೆ ಚಲಿಸಿದವು. ಯಾಕೆಂದರೆ

ಜೀವಿಗಳನ್ನು ನಿಯಂತ್ರಿಸುವ ಆತ್ಮನು ಚಕ್ರಗಳಲ್ಲಿದ್ದನು.
21ಹೀಗೆ ಜೀವಿಗಳು ಚಲಿಸಿದಾಗ ಚಕ್ರಗಳು ಚಲಿಸಿದವು.
ಜೀವಿಗಳು ನಿಂತಾಗ ಚಕ್ರಗಳೂ ನಿಂತವು. ಜೀವಿಗಳು
ಗಾಳಿಯಲ್ಲಿ ಮೇಲಕ್ಕೆ ಹೋದರೆ, ಚಕ್ರಗಳೂ ಅವುಗ
ಳೊಂದಿಗೆ ಮೇಲಕ್ಕೆ ಹೋದವು; ಯಾಕೆಂದರೆ ಜೀವಿ
ಗಳನ್ನು ನಿಯಂತ್ರಿಸುವ ಆತ್ಮವು ಇತ್ತು.

22ಆ ಜೀವಿಗಳ ತಲೆಗಳ ಮೇಲೆ ಆಶ್ಚರ್ಯಕರವಾದ
ಒಂದು ಗುಮಟದಂತಿರುವ ವಸ್ತುವು ಹರಡಿಕೊಂಡಿತ್ತು.
ಅದು ತಲೆಕೆಳಕಾಗಿ ಇಟ್ಟಿದ್ದ ಬೋಗುಣಿಯಂತಿತ್ತು. ಅದು
ಸ್ಪಟಿಕದಂತೆ ಸ್ವಚ್ಛವಾಗಿತ್ತು. 23ಈ ಬೋಗುಣಿಯಡಿಯಲ್ಲಿ
ಒಂದೊಂದು ಜೀವಿಯು ತನ್ನ ಎರಡು ರೆಕ್ಕೆಗಳನ್ನು ಚಾಚಿ
ಕೊಂಡು ಮತ್ತೊಂದು ಜೀವಿಯನ್ನು ತಾಕುತ್ತಿತ್ತು.
ಒಂದೊಂದು ಜೀವಿಯ ಮತ್ತೆರಡು ರೆಕ್ಕೆಗಳು ಅದರ
ದೇಹವನ್ನು ಆವರಿಸಿಕೊಂಡಿದ್ದವು.

24ಜೀವಿಗಳು ಚಲಿಸಿದಾಗಲೆಲ್ಲಾ ಅವುಗಳ ರೆಕ್ಕೆಗಳ ಗಟ್ಟಿ
ಯಾದ ಶಬ್ದ ನನಗೆ ಕೇಳಿಸಿತು. ಅದು ನೀರು ಭೋರ್ಗರೆ
ಯುವ ಶಬ್ದದಂತಿತ್ತು. ಸರ್ವಶಕ್ತನಾದ ದೇವರ ಶಬ್ದದಂತೆ
ಅದು ಗಟ್ಟಿಯಾಗಿತ್ತು. ಅದು ದೊಡ್ಡ ಸೈನ್ಯದ ಅಥವಾ ಜನ
ಸಮೂಹದ ಶಬ್ದದಂತಿತ್ತು. ಜೀವಿಗಳು ಚಲಿಸುವುದನ್ನು
ನಿಲ್ಲಿಸಿದಾಗ ಅವುಗಳು ತಮ್ಮ ರೆಕ್ಕೆಗಳನ್ನು ತಮ್ಮ ಪಾರ್ಶ್ವ
ಗಳಲ್ಲಿ ಕೆಳಗಿಳಿಸುತ್ತಿದ್ದವು.

25ಜೀವಿಗಳು ಚಲಿಸುವದನ್ನು ನಿಲ್ಲಿಸಿ ರೆಕ್ಕೆಗಳನ್ನು ಕೆಳ
ಗಿಳಿಸಿದವು. ಆಗ ಇನ್ನೊಂದು ದೊಡ್ಡ ಶಬ್ದ ಉಂಟಾ
ಯಿತು. ಅವುಗಳ ತಲೆಗಳ ಮೇಲ್ಗಡೆಯ ಬೋಗುಣಿಯ
ಮೇಲಿನಿಂದ ಆ ಶಬ್ದವು ಹೊರಟಿತು. 26ಆ ಬೋಗು
ಣಿಯ ಮೇಲೆ ಸಿಂಹಾಸನದಂತಿದ್ದ ವಸ್ತುವು ಇತ್ತು. ಅದು
ನೀಲಮಣಿಯಂತೆ ನೀಲಿ ಬಣ್ಣದ್ದಾಗಿತ್ತು. ಆ ಸಿಂಹಾಸನದ
ಮೇಲೆ ಕುಳಿತುಕೊಂಡಿದ್ದ ಒಬ್ಬನು ಮನುಷ್ಯನಂತೆ
ಕಾಣುತ್ತಿದ್ದನು. 27ನಾನು ಆತನ ಸೊಂಟದ ಮೇಲ್ಭಾಗ
ವನ್ನು ನೋಡಿದಾಗ, ಆತನು ಬೆಂಕಿಯಿಂದ ಸುತ್ತುವರಿದ
ಕಾದಲೋಹದಂತೆ ಕಂಡನು. ನಾನು ಆತನ ಸೊಂಟ
ದಿಂದ ಕೆಳಭಾಗವನ್ನು ನೋಡಿದಾಗ ಆತನು ಬೆಂಕಿಯಂತೆ
ಕಂಡನು. ಆತನ ಸುತ್ತಲೂ ಪ್ರಕಾಶಮಾನವಾದ ಬೆಳಕಿತ್ತು.
28ಆತನ ಸುತ್ತಲೂ ಇದ್ದ ಪ್ರಕಾಶವು ಮೇಘಬಿಲ್ಲಿ
ನಂತೆಯೂ ಯೆಹೋವನ ಮಹಿಮೆಯಂತೆಯೂ ಕಾಣು
ತ್ತಿತ್ತು. ನಾನು ಅದನ್ನು ನೋಡಿದ ಕೂಡಲೇ ನೆಲಕ್ಕೆ
ಬಿದ್ದೆನು. ಮುಖವನ್ನು ನೆಲದ ಮೇಲಿಟ್ಟು ಅಡ್ಡಬಿದ್ದೆನು.
ಆಗ ನನ್ನೊಂದಿಗೆ ಮಾತನಾಡುತ್ತಿದ್ದ ಸ್ವರವನ್ನು ಕೇಳಿದೆನು.

2 ಆ ಸ್ವರವು, ‘‘ನರಪುತ್ರನೇ, ಎದ್ದೇಳು ನಾನು
ನಿನ್ನೊಂದಿಗೆ ಮಾತನಾಡುತ್ತೇನೆ’’ ಎಂದಿತು. 2ಆತನು
ನನ್ನೊಂದಿಗೆ ಮಾತನಾಡುತ್ತಿರಲು, ಆತ್ಮವು ನನ್ನೊಳಗೆ
ಪ್ರವೇಶಿಸಿ, ನಾನು ಕಾಲೂರಿ ನಿಂತುಕೊಳ್ಳುವಂತೆ
ಮಾಡಿತು. ಆತನು ನನ್ನೊಂದಿಗೆ ಮಾತಾಡುವುದು ನನಗೆ
ಕೇಳಿಸಿತು. 3ಆತನು ನನ್ನೊಂದಿಗೆ, ‘‘ನರಪುತ್ರನೇ,
ಇಸ್ರೇಲ್ ಜನಾಂಗದವರೊಡನೆ ಮಾತನಾಡಲು ನಿನ್ನನ್ನು
ಕಳುಹಿಸುತ್ತಿದ್ದೇನೆ. ಅವರು ಎಷ್ಟೋ ಬಾರಿ ನನಗೆ
ವಿರುದ್ಧವಾಗಿ ಎದ್ದರು. ಅವರ ಪೂರ್ವಿಕರೂ ನನಗೆ
ವಿರುದ್ಧವಾಗಿ ಎದ್ದಿದ್ದರು. ನನಗೆ ವಿರುದ್ಧವಾಗಿ ಎಷ್ಟೋ
ವೇಳೆ ಪಾಪ ಮಾಡಿದರು. ಈಗಲೂ ಅವರು ಪಾಪ ಮಾಡು
ತ್ತಲೇ ಇದ್ದಾರೆ. 4ಆ ಜನರೊಂದಿಗೆ ಮಾತನಾಡಲು ನಾನು
ನಿನ್ನನ್ನು ಕಳುಹಿಸುತ್ತಿದ್ದೇನೆ. ಅವರು ಬಹಳವಾಗಿ ಪ್ರತಿ
ಭಟಿಸುವವರೂ ಮೊಂಡರೂ ಆಗಿದ್ದಾರೆ. ಆದರೆ ನೀನು
ಅವರೊಂದಿಗೆ ಮಾತಾಡಿ, ‘ನಮ್ಮ ಒಡೆಯನಾದ
ಯೆಹೋವನು ಇದನ್ನು ಹೇಳಿದ್ದಾನೆ’ ಎಂದು ಹೇಳ
ಬೇಕು. 5ಜನರು ನಿನ್ನ ಮಾತನ್ನು ಕೇಳಬಹುದು ಅಥವಾ
ಕೇಳದಿರಬಹುದು: ಯಾಕೆಂದರೆ ಅವರು ದಂಗೆಕೋರ
ರಾಗಿದ್ದಾರೆ. ನನ್ನ ಮುಂದೆ ಪಾಪಮಾಡುವುದನ್ನು ನಿಲ್ಲಿಸ
ಲಿಲ್ಲ. ಅವರು ಯಾವಾಗಲೂ ನನ್ನ ವಿರುದ್ಧ ದಂಗೆ
ಏಳುವರು. ಆದ್ದರಿಂದ ನಾನು ತಿಳಿಸಿದ್ದನ್ನೇ ನೀನು ಹೇಳ
ಬೇಕು. ಆಗ ಅವರು ತಮ್ಮ ಮಧ್ಯೆ ಒಬ್ಬ ಪ್ರವಾದಿ ಇದ್ದಾ
ನೆಂದು ಗ್ರಹಿಸಿಕೊಳ್ಳುವರು.

6‘‘ನರಪುತ್ರನೇ, ಆ ಜನರು ನಿನ್ನನ್ನು ವಿರೋಧಿಸಿದರೂ
ನೀನು ಅವರಿಗೆ ಭಯಪಡಬೇಡ ಮತ್ತು ಅವರು ಹೇಳುವ
ಮಾತುಗಳಿಗೆ ನೀನು ಹೆದರಬೇಡ. ಮುಳ್ಳುಗಳೂ ಮುಳ್ಳು
ಪೊದೆಗಳೂ ನಿನಗೆ ಒತ್ತುವಂತೆಯೂ ನೀನು ಚೇಳುಗಳ
ಮೇಲೆ ಕುಳಿತುಕೊಂಡಿರುವಂತೆಯೂ ಅದು ಇರುವದು.
ಆದರೆ ಅವರಾಡುವ ಮಾತುಗಳಿಗೆ ಭಯಪಡಬೇಡ.
ಅವರು ದಂಗೆಕೋರರು. 7ಅವರು ಕೇಳಲಿ, ಕೇಳದಿರಲಿ,
ನಾನು ಹೇಳುವದನ್ನುಅವರಿಗೆ ತಿಳಿಸು; ಯಾಕೆಂದರೆ
ಅವರು ದಂಗೆಕೋರರು.

8‘‘ನರಪುತ್ರನೇ, ನಾನು ಹೇಳುವದನ್ನು ನೀನು ಸರಿ
ಯಾಗಿ ಕೇಳಬೇಕು. ದಂಗೆಕೋರರಾದ ಆ ಜನರಂತೆ
ನೀನೂ ನನಗೆ ವಿರುದ್ಧವಾಗಿರಬೇಡ. ನಾನು ನಿನಗೆ
ಕೊಡಲಿರುವುದನ್ನು ನಿನ್ನ ಬಾಯಿ ತೆರೆದು ತಿನ್ನು.’’

9ಆಗ ನಾನು ಒಂದು ಕೈ ನನ್ನ ಬಳಿಗೆ ಬರುವದನ್ನು
ಕಂಡೆನು. ಆ ಕೈ ಒಂದು ಸುರುಳಿಯನ್ನು ಹಿಡುಕೊಂಡಿತ್ತು.
10ನಾನು ಆ ಸುರುಳಿಯನ್ನು ತೆರೆದಾಗ ಅದರ ಮುಂಭಾಗ
ದಲ್ಲಿಯೂ ಹಿಂಭಾಗದಲ್ಲಿಯೂ ಮಾತುಗಳು ಬರೆಯ
ಲ್ಪಟ್ಟಿದ್ದವು. ನಾನಾ ತರದ ಪ್ರಲಾಪಗಳು, ನರಳಾಟಗಳು
ಮತ್ತು ಗೋಳಾಟಗಳು ಬರೆಯಲ್ಪಟ್ಟಿದ್ದವು.

3 ದೇವರು ನನಗೆ, ‘‘ನರಪುತ್ರನೇ, ನೀನು ನೋಡುತ್ತಿ
ರುವ ಈ ಸುರುಳಿಯನ್ನು ತಿನ್ನು. ಆಮೇಲೆ ಹೋಗಿ
ಇಸ್ರೇಲ್ ವಂಶದವರಿಗೆ ಈ ವಿಷಯಗಳ ಬಗ್ಗೆ ಹೇಳು’’
ಎಂದು ಹೇಳಿದನು.

2ಆಗ ನಾನು ನನ್ನ ಬಾಯಿಯನ್ನು ತೆರೆಯಲು ಆತನು
ಆ ಸುರುಳಿಯನ್ನು ನನ್ನ ಬಾಯೊಳಗೆ ಹಾಕಿದನು. 3ಆಗ
ದೇವರು ಹೇಳಿದ್ದೇನೆಂದರೆ, ‘‘ನರಪುತ್ರನೇ, ನಾನು ಈ
ಸುರುಳಿಯನ್ನು ನಿನಗೆ ಕೊಡುತ್ತೇನೆ. ಇದನ್ನು ನುಂಗು.
ಇದು ನಿನ್ನ ಹೊಟ್ಟೆಯನ್ನು ತುಂಬಲಿ.’’

ಆಗ ನಾನು ಆ ಸುರುಳಿಯನ್ನು ತಿಂದೆನು. ಅದು ನನ್ನ
ಬಾಯಲ್ಲಿ ಜೇನುತುಪ್ಪದ ಸಿಹಿಯಂತೆ ರುಚಿಯಾಗಿತ್ತು.

4ಆಗ ದೇವರು ನನಗೆ ಹೇಳಿದ್ದೇನೆಂದರೆ, ‘‘ನರ
ಪುತ್ರನೇ, ಇಸ್ರೇಲ್ ವಂಶದವರ ಬಳಿಗೆ ಹೋಗಿ ನನ್ನ
ಮಾತುಗಳನ್ನು ಅವರಿಗೆ ತಿಳಿಸು. 5ನೀನು ಭಾಷೆಯನ್ನು
ಅರ್ಥಮಾಡಿಕೊಳ್ಳುವುದಕ್ಕಾಗಲೀ ಮಾತನಾಡುವುದ
ಕ್ಕಾಗಲೀ ಕಷ್ಟಕರವಾದ ಪರದೇಶಿಯರ ಬಳಿಗೆ ನಾನು
ಕಳುಹಿಸುತ್ತಿಲ್ಲ. ನಾನು ಇಸ್ರೇಲ್ ವಂಶದವರ ಬಳಿಗೆ
ನಿನ್ನನ್ನು ಕಳುಹಿಸುತ್ತಿದ್ದೇನೆ. 6ಭಾಷೆಗಳನ್ನು ಅರ್ಥ ಮಾಡಿ
ಕೊಳ್ಳಲು ಕಷ್ಟಕರವಾದ ಅಥವಾ ಮಾತಾಡಲು ಕಷ್ಟವಾದ
ಅಥವಾ ಪದಗಳನ್ನು ಅರ್ಥಮಾಡಿಕೊಳ್ಳಲು ನಿನಗೆ ಸಾಧ್ಯ
ವಾಗದ ಅನೇಕ ಜನಾಂಗಗಳ ಬಳಿಗೆ ನಾನು ನಿನ್ನನ್ನು
ಕಳುಹಿಸುತ್ತಿಲ್ಲ. ಆ ಜನಾಂಗಗಳ ಬಳಿಗೆ ನಾನು ನಿನ್ನನ್ನು
ಕಳುಹಿಸಿದರೆ ಅವರು ಖಂಡಿತವಾಗಿಯೂ ಕಿವಿಗೊಡು
ವರು. 7ಆದರೆ ನಾನು ಇಸ್ರೇಲ್ ಸಂತಾನದವರ ಬಳಿಗೆ
ನಿನ್ನನ್ನು ಕಳುಹಿಸುತ್ತಿದ್ದೇನೆ. ಇವರಿಗೇ ಮೊಂಡುತನವಿರು
ವದು. ಇವರು ಹಠಮಾರಿಗಳು. ನಿನ್ನ ಮಾತನ್ನು ಕೇಳಲು
ನಿರಾಕರಿಸುವರು. ಅವರಿಗೆ ನನ್ನ ಮಾತುಗಳನ್ನು ಕೇಳಲು
ಇಷ್ಟವಿಲ್ಲ. 8ಅವರು ಕಠಿಣರಾಗಿರುವಂತೆಯೇ ನಾನು
ನಿನ್ನನ್ನೂ ಕಠಿಣಗೊಳಿಸುತ್ತೇನೆ. ನಿನಗೂ ಅವರಂತೆ
ಮೊಂಡುತನವನ್ನು ಕೊಡುವೆನು. 9ವಜ್ರವು ಬಂಡೆಕಲ್ಲಿ
ಗಿಂತ ಗಟ್ಟಿಯಾದ ವಸ್ತು. ಅದೇ ಪ್ರಕಾರ ನಿನ್ನ ತಲೆ ಅವರ
ತಲೆಗಿಂತ ಗಟ್ಟಿಯಾಗಿರುವದು. ಆ ಜನರಿಗೆ ಭಯಪಡ
ಬೇಡ. ಅವರು ದಂಗೆಕೋರರಾಗಿದ್ದರೂ ಅವರ ಸಮ್ಮುಖ
ದಲ್ಲಿ ಭಯಪಡಬೇಡ. ’’

10ದೇವರು ನನಗೆ ಮತ್ತೇ ಹೇಳಿದ್ದೇನೆಂದರೆ, ‘‘ನರ
ಪುತ್ರನೇ, ನಾನು ಹೇಳುವ ಪ್ರತಿಯೊಂದು ಮಾತನ್ನು
ನೀನು ಕಿವಿಗೊಟ್ಟು ಕೇಳಬೇಕು. ಆ ಮಾತುಗಳನ್ನು ನೀನು
ಜ್ಞಾಪಕದಲ್ಲಿಟ್ಟುಕೊಳ್ಳಬೇಕು. 11ಬಳಿಕ ಸೆರೆವಾಸದಲ್ಲಿ
ರುವ ನಿನ್ನ ಸ್ವಜನರ ಬಳಿಗೆ ಹೋಗು. ಅವರು ಕೇಳಲಿ,
ಕೇಳದಿರಲಿ, ನೀನು ಅವರಿಗೆ, ದೇವರಾದ ಯೆಹೋವನು
ಹೀಗೆ ಹೇಳುತ್ತಾನೆ ’’’ ಎಂದು ಹೇಳು.

12ಆಗ ದೇವರಾತ್ಮವು ನನ್ನನ್ನು ಮೇಲಕ್ಕೆ ಎತ್ತಿತು.
ಯೆಹೋವನ ಮಹಿಮೆಯು ತನ್ನ ಸ್ಥಳದಿಂದ ಮೇಲೇರಿ
ದಾಗ ನನ್ನ ಹಿಂಭಾಗದಲ್ಲಿ ಮಹಾ ಗುಡುಗುವ ಶಬ್ದವನ್ನು
ಕೇಳಿದೆನು. 13ಅದು ಜೀವಿಗಳು ತಮ್ಮ ರೆಕ್ಕೆಗಳನ್ನು ಒಂದ
ಕ್ಕೊಂದು ಬಡಿದಾಡುವ ಸಪ್ಪಳ ಮತ್ತು ಅವುಗಳ
ಪಕ್ಕದಲ್ಲಿದ್ದ ಚಕ್ರಗಳ ಸಪ್ಪಳ. 14ಆತ್ಮವು ನನ್ನನ್ನು ಅಲ್ಲಿಂದ
ಎತ್ತಿಕೊಂಡು ಹೋಯಿತು. ನಾನು ಆಗ ದುಃಖಗೊಂಡು
ನನ್ನ ಆತ್ಮದಲ್ಲಿ ತತ್ತರಗೊಂಡೆನು. ಆದರೆ ಯೆಹೋವನ
ಶಕ್ತಿಯು ನನ್ನನ್ನು ಸಂಪೂರ್ಣವಾಗಿ ತನ್ನ ಅಧೀನಕ್ಕೆ
ತೆಗೆದುಕೊಂಡಿತು.

15ಕೆಬಾರ್ ಕಾಲುವೆ ಪಕ್ಕದಲ್ಲಿದ್ದ ತೇಲ್ ಆಬೀಬ್‌ನಲ್ಲಿ
ಸೆರೆಯಾಳುಗಳಾಗಿದ್ದ ಇಸ್ರೇಲ್ ಜನರ ಬಳಿಗೆ ನಾನು
ಒಯ್ಯಲ್ಪಟ್ಟೆನು. ಅಲ್ಲಿದ್ದ ಜನರ ಮಧ್ಯೆ ನಾನು ಏಳು ದಿವಸ
ಸ್ತಬ್ಧನಾಗಿದ್ದೆನು.

16ಏಳು ದಿವಸಗಳ ತರುವಾಯ, ಯೆಹೋವನ ಸಂದೇ
ಶವು ನನಗೆ ಬಂದಿತು. ಆತನು ಹೇಳಿದ್ದೇನೆಂದರೆ: 17‘‘ನರ
ಪುತ್ರನೇ, ನಾನು ನಿನ್ನನ್ನು ಇಸ್ರೇಲರಿಗೆ ಕಾವಲುಗಾರನ
ನ್ನಾಗಿ ಮಾಡಿದ್ದೇನೆ. ನಾನು ಅವರಿಗೆ ಸಂಭವಿಸುವ ಕೆಟ್ಟ
ವಿಷಯಗಳನ್ನು ನಿನಗೆ ಹೇಳುತ್ತಿದ್ದೇನೆ. ಮತ್ತು ನೀನ್ನ ನನ್ನ
ಪರವಾಗಿ ಅವರನ್ನು ಎಚ್ಚರಿಸು. 18ನಾನು ದುಷ್ಟನಿಗೆ,
‘ನೀನು ಸಾಯುವೆ’ ಎಂದು ಹೇಳುವಾಗ, ನೀನು ಅವ
ನನ್ನು ಎಚ್ಚರಿಸಬೇಕು. ಅವನು ತನ್ನ ಪ್ರಾಣವನ್ನು ರಕ್ಷಿಸಿ
ಕೊಳ್ಳುವದಕ್ಕಾಗಿ ತನ್ನ ಜೀವಿತವನ್ನು ಮಾರ್ಪಡಿಸಿಕೊಂಡು
ದುಷ್ಟಕಾರ್ಯ ನಿಲ್ಲಿಸಬೇಕೆಂದು ನೀನು ಅವನಿಗೆ ಹೇಳ
ಬೇಕು. ನೀನು ಅವನನ್ನು ಎಚ್ಚರಿಸದಿದ್ದರೆ ಅವನು ತನ್ನ
ಪಾಪದ ದೆಸೆಯಿಂದ ಸಾಯುವನು. ಆದರೆ ಅವನ ಮರ
ಣಕ್ಕೆ ನಾನು ನಿನ್ನನ್ನೇ ಹೊಣೆಗಾರನನ್ನಾಗಿ ಮಾಡುತ್ತೇನೆ.

19‘‘ಒಂದುವೇಳೆ ನೀನು ಒಬ್ಬ ಮನುಷ್ಯನನ್ನು ಎಚ್ಚರಿಸಿ
ಅವನು ಪಾಪ ಮಾಡದಂತೆ ಮತ್ತು ಅವನ ಜೀವಿತವನ್ನು
ಬದಲಾವಣೆ ಮಾಡಲು ಹೇಳಿದ್ದಲ್ಲಿ ಆ ಮನುಷ್ಯನು ನಿನ್ನ
ಮಾತುಗಳನ್ನು ಕೇಳಲು ನಿರಾಕರಿಸಿದರೆ, ಅವನು ಪಾಪ
ಮಾಡುವುದರಿಂದ ಸಾಯುವನು. ಆದರೆ ನೀನು ನಿನ್ನ
ಜೀವವನ್ನು ರಕ್ಷಿಸಿಕೊಳ್ಳುವಿ.

20‘‘ಒಳ್ಳೆಯವನು ತನ್ನ ಒಳ್ಳೆಯತನವನ್ನು ತೊರೆದು
ಕೆಟ್ಟದ್ದನ್ನು ಮಾಡಿದರೆ, ನಾನು ಅವನ ಹಾದಿಗೆ ತಡೆಯನ್ನು
ಹಾಕಿ ಅವನು ಬೀಳುವಂತೆ ಮಾಡುವೆನು; ಅವನು
ಸಾಯುವನು. ನೀನು ಅವನನ್ನು ಎಚ್ಚರಿಸಲಿಲ್ಲವಾದ್ದ
ರಿಂದ ಅವನು ತನ್ನ ಪಾಪದ ನಿಮಿತ್ತ ಸಾಯುವನು. ಆದರೆ
ಅವನ ಮರಣಕ್ಕೆ ನಾನು ನಿನ್ನನ್ನೇ ಹೊಣೆಗಾರನನ್ನಾಗಿ
ಮಾಡುತ್ತೇನೆ. ಜನರು ಅವನ ಒಳ್ಳೆಯ ಕಾರ್ಯಗಳನ್ನು
ಜ್ಞಾಪಿಸಿಕೊಳ್ಳುವದಿಲ್ಲ.

21‘‘ನೀನು ಆ ಒಳ್ಳೆಯವನಿಗೆ ಪಾಪ ಮಾಡದಂತೆ ಎಚ್ಚರಿ
ಸಿದರೆ ಮತ್ತು ಅವನು ಪಾಪ ಮಾಡುವದನ್ನು ನಿಲ್ಲಿಸಿದರೆ,
ಆ ಮನುಷ್ಯನು ಸಾಯುವದಿಲ್ಲ; ಯಾಕೆಂದರೆ ಅವನು ನಿನ್ನ
ಎಚ್ಚರಿಕೆಗೆ ಕಿವಿಗೊಟ್ಟನು ಮತ್ತು ನೀನು ನಿನ್ನ ಸ್ವಂತ
ಪ್ರಾಣವನ್ನು ರಕ್ಷಿಸಿಕೊಂಡಿರುವೆ.’’

22‘‘ಯೆಹೋವನ ಆತ್ಮನಿಂದ ಪರವಶನಾದೆನು. ಆತನು
ನನಗೆ, ‘‘ಎದ್ದೇಳು, ಬಯಲು ಸೀಮೆಗೆ ಹೋಗು. ಅಲ್ಲಿ
ನಾನು ನಿನ್ನೊಂದಿಗೆ ಮಾತನಾಡುವೆನು’’ಎಂದು
ಹೇಳಿದನು.
23ನಾನು ಎದ್ದು ಬಯಲು ಸೀಮೆಗೆ ಹೋದೆನು.
ಕೆಬಾರ್ ನದಿಯ ಪಕ್ಕದಲ್ಲಿ ನಾನು ಕಂಡ ಮಹಿಮೆ
ಯಂತಿದ್ದ ಯೆಹೋವನ ಮಹಿಮೆಯು ಅಲ್ಲಿ ಇತ್ತು.
ನಾನು ನನ್ನ ಮುಖವನ್ನು ನೆಲಕ್ಕೆ ತಾಗಿಸಿ ಬಗ್ಗಿ ನಮಸ್ಕ
ರಿಸಿದೆ. 24ಆಗ ಆತ್ಮವು ನನ್ನೊಳಗೆ ಪ್ರವೇಶಿಸಿ, ನಾನು
ಕಾಲೂರಿ ನಿಂತುಕೊಳ್ಳುವಂತೆ ಮಾಡಿತು. ಬಳಿಕ ಆತನು
ನನಗೆ, ‘‘ ನೀನು ನಿನ್ನ ಮನೆಯೊಳಗೆ ಹೋಗಿ ಒಳಗಿನಿಂದ
ಕದವನ್ನು ಹಾಕಿಕೊ. 25ನರಪುತ್ರನೇ, ಜನರು ಹಗ್ಗ
ಹಿಡಿದುಕೊಂಡು ಬಂದು ನಿನ್ನನ್ನು ಕಟ್ಟುವರು. ನಿನ್ನನ್ನು
ಜನರ ಮಧ್ಯದಿಂದ ಹೊರಹೋಗದಂತೆ ಮಾಡುವರು.
26ನಿನ್ನ ನಾಲಿಗೆಯು ಸೇದಿಹೋಗುವಂತೆ ಮಾಡುವೆನು.
ನಿನಗೆ ಮಾತನಾಡಲು ಆಗದು. ಆದುದರಿಂದ ಅವರನ್ನು
ಖಂಡಿಸಲು ಯಾರೂ ಇರುವದಿಲ್ಲ. ಯಾಕೆಂದರೆ ಆ
ಜನರು ಯಾವಾಗಲೂ ನನ್ನ ವಿರುದ್ಧವಾಗಿ ವರ್ತಿಸುವರು.
27ಆದರೆ ನಾನು ನಿನ್ನೊಂದಿಗೆ ಮಾತನಾಡುವಾಗ, ನಿನ್ನನ್ನು
ಮಾತನಾಡಲಾಗುವಂತೆ ಮಾಡುವೆನು. ನೀನು ಅವರಿಗೆ,
‘ನಮ್ಮ ಒಡೆಯನಾದ ಯೆಹೋವನು ಹೀಗೆ ಹೇಳುತ್ತಾನೆ’
ಎಂದು ಹೇಳಬೇಕು. ಕೆಲವರು ಕಿವಿಗೊಡುವರು;
ಕೆಲವರು ಕಿವಿಗೊಡರು; ಯಾಕೆಂದರೆ ಅವರು ದಂಗೆ
ಕೋರರಾಗಿದ್ದಾರೆ. ಇಷ್ಟವಿಲ್ಲದಿದ್ದರೂ ಒಳ್ಳೆಯದು.
ಆದರೆ ಅವರು ಯಾವಾಗಲೂ ನನಗೆ ವಿರುದ್ಧವಾಗಿಯೇ
ಇರುವರು.

4 ‘‘ನರಪುತ್ರನೇ, ಒಂದು ಇಟ್ಟಿಗೆಯನ್ನು ತೆಗೆದುಕೋ,
ಅದನ್ನು ನಿನ್ನ ಮುಂದೆ ಇಟ್ಟು ಅದರ ಮೇಲೆ ಒಂದು
ಚಿತ್ರವನ್ನು ಅಂದರೆ ಜೆರುಸಲೇಮ್ ನಗರದ ಚಿತ್ರವನ್ನು
ಕೊರೆ. 2ಆಮೇಲೆ ನೀನೇ ಒಂದು ಸೈನ್ಯದೊಂದಿಗೆ ಆ
ನಗರವನ್ನು ಮುತ್ತಿಗೆ ಹಾಕಿದವನಂತೆ ನಟನೆ ಮಾಡು.
ನಗರದ ಸುತ್ತಲೂ ಮಣ್ಣಿನ ದಿಬ್ಬಗಳನ್ನು ಮಾಡಿ ನೀನು
ಅದಕ್ಕೆ ಧಾಳಿ ಮಾಡಲು ಸಹಾಯವಾಗುವಂತೆ ಮಾಡು.
ನಗರದ ಪೌಳಿಗೋಡೆಯ ತನಕ ಒಂದು ರಸ್ತೆಯನ್ನು
ತಯಾರಿಸು. ಒಂದು ಭಿತ್ತಿಭೇದಕ ಯಂತ್ರವನ್ನು ತಂದು
ಸೈನ್ಯದ ಪಾಳೆಯಗಳನ್ನು ನಗರದ ಸುತ್ತಲೂ ನಿರ್ಮಿಸು.
3ಆ ಬಳಿಕ ಒಂದು ಕಬ್ಬಿಣದ ರೊಟ್ಟಿ ಕಲ್ಲನ್ನು ನಿನಗೂ
ನಗರಕ್ಕೂ ಮಧ್ಯೆ ಇಡು. ಅದು ನಿನಗೂ ನಗರಕ್ಕೂ ನಡುವೆ
ಇರುವ ಕಬ್ಬಿಣದ ಗೋಡೆಯಂತಿರುವುದು. ಈ
ರೀತಿಯಾಗಿ ನೀನು ಆ ನಗರಕ್ಕೆ ವಿರುದ್ಧವಾಗಿರುವಂತೆ
ಕಂಡು ಬರುವಿ. ನೀನು ಆ ನಗರಕ್ಕೆ ಮುತ್ತಿಗೆ ಹಾಕಿ ಅದರ
ಮೇಲೆ ಯುದ್ಧ ಮಾಡುವಿ. ಯಾಕೆಂದರೆ, ಶೀಘ್ರದಲ್ಲೇ
ಏನು ಸಂಭವಿಸುತ್ತದೆ ಎಂಬುದಕ್ಕೆ ಇಸ್ರೇಲ್ ಜನರಿಗೆ
ಇದು ಸೂಚನೆಯಾಗಿದೆ.
4‘‘ಆಮೇಲೆ ನೀನು ನಿನ್ನ ಎಡಮಗ್ಗುಲಲ್ಲಿ ಮಲಗಿ
ಕೊಂಡು ಇಸ್ರೇಲ್ ಜನರ ದೋಷವನ್ನು ನಿನ್ನ ಎಡ
ಮಗ್ಗುಲ ಮೇಲೆ ಹಾಕು. ನೀನು ನಿನ್ನ ಎಡಮಗ್ಗುಲಲ್ಲಿ
ಮಲಗಿರುವಷ್ಟು ದಿನ ಇಸ್ರೇಲರ ದೋಷಗಳನ್ನು ಹೊತ್ತು
ಕೊಳ್ಳುವೆ. 5ನೀನು ಮುನ್ನೂರತೊಂಭತ್ತು ದಿವಸಗಳ
ತನಕ ಇಸ್ರೇಲರ ದೋಷಗಳನ್ನು ಹೊತ್ತುಕೊಳ್ಳಬೇಕು.
ಈ ರೀತಿಯಾಗಿ ಇಸ್ರೇಲರು ಎಷ್ಟು ಕಾಲ ಶಿಕ್ಷೆ ಅನುಭ
ವಿಸುವರೆಂದು ತೋರಿಸುತ್ತೇನೆ. ಆ ಒಂದು ದಿವಸವು
ಒಂದು ವರ್ಷದಂತಿರುವುದು.
6‘‘ಅನಂತರ ನೀನು ನಿನ್ನ ಬಲಗಡೆಯಲ್ಲಿ ನಲವತ್ತು
ದಿವಸಗಳ ಕಾಲ ಮಲಗಬೇಕು. ಈ ಸಾರಿ ನೀನು ಯೆಹೂ
ದದ ದೋಷಗಳನ್ನು ನಲವತ್ತು ದಿವಸ ಹೊತ್ತುಕೊಳ್ಳುವಿ.
ಒಂದು ದಿವಸವು ಒಂದು ವರ್ಷಕ್ಕೆ ಸಮಾನ. ಯೆಹೂದವು
ಎಷ್ಟು ಕಾಲ ಶಿಕ್ಷೆಯನ್ನು ಅನುಭವಿಸಬೇಕೆಂದು ಇದು
ತೋರಿಸುವುದು.’’
7ದೇವರು ಮತ್ತೆ ಹೇಳಿದ್ದೇನೆಂದರೆ: ‘‘ಈಗ ನೀನು ನಿನ್ನ
ಬಟ್ಟೆಯ ತೋಳನ್ನು ಮೇಲಕ್ಕೆ ಮಾಡಿ ನಿನ್ನ ಕೈಯನ್ನು
ಇಟ್ಟಿಗೆಯ ಮೇಲೆ ಎತ್ತು. ಜೆರುಸಲೇಮ್ ನಗರದ ಮೇಲೆ
ಯುದ್ಧ ಮಾಡುವವನಂತೆ ನಟಿಸು. ಪಟ್ಟಣದ ವಿರುದ್ಧ
ವಾಗಿ ಪ್ರವಾದಿಸು. 8ನೋಡು, ಈಗ ನಾನು ನಿನ್ನನ್ನು
ಹಗ್ಗದಿಂದ ಕಟ್ಟುತ್ತಿದ್ದೇನೆ. ನೀನು ಜೆರುಸಲೇಮ್ ನಗ
ರದ ಮೇಲೆ ನಿನ್ನ ಆಕ್ರಮಣವನ್ನು ಮುಗಿಸುವ ತನಕ
ಒಂದು ಕಡೆಯಿಂದ ಮತ್ತೊಂದು ಕಡೆಗೆ ಹೊರಳಲು
ನಿನ್ನಿಂದಾಗುವದಿಲ್ಲ.’’
9ದೇವರು ಮತ್ತೆ ಹೇಳಿದ್ದೇನೆಂದರೆ: ‘‘ನೀನು ರೊಟ್ಟಿ
ಯನ್ನು ಮಾಡಲು ಗೋಧಿಯ ಕಾಳುಗಳನ್ನು ತರಬೇಕು.
ಸ್ವಲ್ಪ ಗೋಧಿ, ಬಾರ್ಲಿ, ಅವರೆಕಾಯಿ, ಅವರೆ, ನವಣೆ,
ಇವುಗಳನ್ನೆಲ್ಲಾ ಒಂದು ಬೋಗುಣಿಯಲ್ಲಿ ಹಾಕಿ ಬೀಸಿ
ಹಿಟ್ಟು ಮಾಡು. ಈ ಹಿಟ್ಟನ್ನು ನಾದಿ ರೊಟ್ಟಿ ಮಾಡು.
ನೀನು ಮುನ್ನೂರತೊಂಭತ್ತು ದಿವಸಗಳ ಕಾಲ ನಿನ್ನ ಎಡ
ಮಗ್ಗುಲಲ್ಲಿ ಮಲಗಿರುವಾಗ ಅದನ್ನು ಮಾತ್ರ ತಿನ್ನುವೆ.
10ನೀನು ದಿನವೊಂದಕ್ಕೆ ಎಂಟು ರೊಟ್ಟಿಗಳನ್ನು ತಿನ್ನುವೆ.
ನೀನು ಅವುಗಳನ್ನು ಪ್ರತಿದಿನ ಒಂದೇ ಸಮಯದಲ್ಲಿ ತಿನ್ನ
ಬೇಕು. 11ನೀನು ದಿನಕ್ಕೆ ಮೂರು ಲೋಟ ನೀರನ್ನು
ಮಾತ್ರ ಕುಡಿಯಬೇಕು. ನೀನು ಅವುಗಳನ್ನು ಪ್ರತಿದಿನ
ಒಂದೇ ಸಮಯದಲ್ಲಿ ಕುಡಿಯಬೇಕು. 12ನೀನು ಬಾರ್ಲಿ
ರೊಟ್ಟಿಗಳನ್ನು ಮಾಡುವಂತೆ ತಿನ್ನುವದಕ್ಕಾಗಿ ನೀನು ಪ್ರತಿ
ದಿನ ರೊಟ್ಟಿಯನ್ನು ಮಾಡಬೇಕು. ಒಣಗಿದ ಮನುಷ್ಯನ
ಮಲದಲ್ಲಿ ಅದನ್ನು ಸುಡಬೇಕು. ಈ ಬೆಂಕಿಯ ಮೇಲೆ
ರೊಟ್ಟಿಯನ್ನು ಕಾಯಿಸಬೇಕು. ನೀನು ಈ ರೊಟ್ಟಿಯನ್ನು

ಜನರ ಮುಂದೆ ಮಾಡಿ ತಿನ್ನಬೇಕು.'' 13 ಬಳಿಕ ಯೆಹೋ
ವನು, ''ನಾನು ಇಸ್ರೇಲ್ ಜನರನ್ನು ಬಲವಂತವಾಗಿ
ಕಳುಹಿಸುವ ಪರದೇಶಗಳಲ್ಲಿ ಅವರು ಅಶುದ್ಧವಾದ
ರೊಟ್ಟಿಗಳನ್ನು ತಿನ್ನುತ್ತಾರೆಂದು ಇದು ಸೂಚಿಸುತ್ತದೆ''
ಎಂದು ಹೇಳಿದನು.

14 ಆಗ ನಾನು ಹೇಳಿದ್ದೇನೆಂದರೆ, ''ಅಯ್ಯೋ, ನನ್ನ
ಒಡೆಯನಾದ ಯೆಹೋವನೇ, ನಾನು ಎಂದೂ ಅಶುದ್ಧ
ಆಹಾರವನ್ನು ತಿನ್ನಲಿಲ್ಲ. ತಾನಾಗಿಯೇ ಸತ್ತ ಪ್ರಾಣಿಯ
ಮಾಂಸವನ್ನಾಗಲೀ, ಕಾಡು ಪ್ರಾಣಿಯು ಕೊಂದ
ಪ್ರಾಣಿಯ ಮಾಂಸವನ್ನಾಗಲೀ ಎಂದೂ ತಿಂದದ್ದಿಲ್ಲ.
ಬಾಲ್ಯ ಪ್ರಾಯದಿಂದ ಈ ದಿವಸ ಪರ್ಯಂತ ಅಶುದ್ಧ
ಆಹಾರ ತಿಂದಿಲ್ಲ; ಅಂತಹ ಮಾಂಸವೂ ನನ್ನ ಬಾಯೊಳಕ್ಕೆ
ಹೋಗಲಿಲ್ಲ.''

15 ಆಗ ದೇವರು ನನಗೆ, ''ಸರಿ! ಹಾಗಾದರೆ, ರೊಟ್ಟಿ
ಯನ್ನು ಮಾಡುವದಕ್ಕಾಗಿ ಮನುಷ್ಯನ ಮಲದ ಬದಲಾಗಿ
ದನದ ಒಣಗಿದ ಸಗಣಿಯನ್ನು ಉಪಯೋಗಿಸು''ಎಂದು
ಹೇಳಿದನು.

16 ಬಳಿಕ ದೇವರು ನನಗೆ, ''ನರಪುತ್ರನೇ, ನಾನು
ಜೆರುಸಲೇಮಿಗೆ ರೊಟ್ಟಿಯ ಸರಬರಾಜನ್ನು ನಿಲ್ಲಿಸು
ವೆನು. ಜನರಿಗೆ ತಿನ್ನಲು ಕೊಂಚ ರೊಟ್ಟಿ ಸಿಗುವುದು.
ಆಹಾರವು ಮುಗಿದು ಹೋಗುತ್ತಿರುವುದರಿಂದ ಅವರು
ಬಹಳವಾಗಿ ಚಿಂತಿಸುವರು. ಅವರಿಗೆ ಸ್ವಲ್ಪವೇ ಕುಡಿಯುವ
ನೀರು ಇರುವದು. ಆ ನೀರನ್ನು ಕುಡಿಯುವಾಗ ಅವರಿಗೆ
ಭಯಹಿಡಿಯುವುದು. 17 ಯಾಕೆಂದರೆ ಎಲ್ಲರಿಗೆ ಸಾಕಾಗು
ವಷ್ಟು ಆಹಾರ ಸಾಮಾಗ್ರಿಯಾಗಲೀ ನೀರಾಗಲೀ
ಇರುವದಿಲ್ಲ. ಅವರು ಒಬ್ಬರನ್ನೊಬ್ಬರು ಕಂಡು ಗಾಬರಿ
ಗೊಳ್ಳುವರು. ತಮ್ಮ ಪಾಪಗಳ ನಿಮಿತ್ತವಾಗಿ ಅವರು
ಬಡಕಲಾಗಿಯೂ ಹಸಿವೆಯಿಂದಲೂ ಇರುವರು.

5 1-2 ನರಪುತ್ರನೇ, ಈ ಕಾರ್ಯಗಳನ್ನು ಮುತ್ತಿಗೆಯ
ಕಾಲ ಮುಗಿಯಿತೆಂದು ಸೂಚಿಸುವ ಅವಧಿಯ
ನಂತರ ಮಾಡಬೇಕು. ನೀನು ಕ್ಷೌರಿಕನ ಹರಿತವಾದ
ಕ್ಷೌರ ಕತ್ತಿಯನ್ನು ತೆಗೆದುಕೊಳ್ಳಬೇಕು. ನಿನ್ನ ತಲೆಯ
ಕೂದಲನ್ನೂ ಗಡ್ಡವನ್ನೂ ಬೋಳಿಸು. ಕೂದಲನ್ನು
ತ್ರಾಸಿನಲ್ಲಿ ಹಾಕಿ ಅದನ್ನು ತೂಕಮಾಡು. ಆ ಕೂದಲು
ಗಳನ್ನು ಮೂರು ಪಾಲಾಗಿ ಮಾಡು. ಅದರ ಒಂದು
ಪಾಲನ್ನು ನೀನು ಚಿತ್ರಿಸಿದ್ದ ಇಟ್ಟಿಗೆಯ ಮೇಲೆ ಹಾಕು. ಆ
ನಗರದ ಮೇಲೆ ಕೂದಲನ್ನು ಸುಟ್ಟುಬಿಡು. ಇದು,
ಜನರಲ್ಲಿ ಕೆಲವು ಮಂದಿ ನಗರದಲ್ಲಿ ಸಾಯುವರು
ಎಂಬುದಕ್ಕೆ ಗುರುತಾಗಿದೆ. ನೀನು ಕೂದಲಲ್ಲಿ ಮೂರನೆ
ಒಂದು ಭಾಗವನ್ನು ತೆಗೆದುಕೊಂಡು ಅದನ್ನು ಪಟ್ಟಣದ
ಹೊರಗೆ ಸುತ್ತಲೆಲ್ಲಾ ನಿನ್ನ ಕ್ಷೌರಕತ್ತಿಯಿಂದ ಕತ್ತರಿಸು.
ಕೆಲವು ಜನರು ಪಟ್ಟಣದ ಹೊರಗೆ ಸಾಯುತ್ತಾರೆ
ಎಂಬುದನ್ನು ಇದು ಸೂಚಿಸುತ್ತದೆ. ಬಳಿಕ ನಿನ್ನ ಕೂದಲಿನ
ಬೇರೊಂದು ಮೂರನೆಯ ಒಂದು ಭಾಗವನ್ನು ಗಾಳಿ
ಯಲ್ಲಿ ತೂರಿಬಿಡು. ಗಾಳಿಯು ಅದನ್ನು ಬಹುದೂರ
ದವರೆಗೆ ಬಡಿದುಕೊಂಡು ಹೋಗಲಿ. ಇದೇ ರೀತಿಯಲ್ಲಿ
ನಾನು ಖಡ್ಗವನ್ನು ಇರಿದು ಅವರನ್ನು ಬಹುದೂರದ
ದೇಶಗಳಿಗೆ ಅಟ್ಟಿಸಿಬಿಡುವೆನು. 3 ಆದರೆ ನೀನು ಅದರಿಂದ
ಕೆಲವು ಕೂದಲನ್ನು ತೆಗೆದು ನಿನ್ನ ವಸ್ತ್ರದಲ್ಲಿ ಸುತ್ತಿಡು.
ನಾನು ನನ್ನ ಜನರಲ್ಲಿ ಕೆಲವರನ್ನು ರಕ್ಷಿಸುವೆನು ಎಂಬು
ದಕ್ಕೆ ಇದು ಗುರುತಾಗಿದೆ. 4 ಬಳಿಕ ಕೂದಲಲ್ಲಿ ಸ್ವಲ್ಪವನ್ನು
ಮತ್ತೆ ತೆಗೆದುಕೊಂಡು ಬೆಂಕಿಯಲ್ಲಿ ಹಾಕಿ ಸುಟ್ಟುಬಿಡು.
ಅಲ್ಲಿಂದ ಬೆಂಕಿಯು ಹಬ್ಬಿ ಇಡೀ ಇಸ್ರೇಲ್ ಜನಾಂಗ
ವನ್ನು ನಾಶ ಮಾಡುವುದು.''

5 ಆಮೇಲೆ ನನ್ನ ಒಡೆಯನಾದ ಯೆಹೋವನು
ಹೀಗೆಂದನು; ''ಆ ಇಟ್ಟಿಗೆಯು ಜೆರುಸಲೇಮಿನ ಚಿತ್ರ.
ನಾನು ಜೆರುಸಲೇಮನ್ನು ಇತರ ಜನಾಂಗಗಳ ಮಧ್ಯದಲ್ಲಿ
ನೆಲೆಗೊಳಿಸಿದ್ದೇನೆ. ಆಕೆಯ ಸುತ್ತಲೂ ಬೇರೆ ದೇಶಗಳಿವೆ.
6 ಜೆರುಸಲೇಮಿನ ನಿವಾಸಿಗಳು ನನ್ನ ಆಜ್ಞೆಗಳಿಗೆ ದಂಗೆ
ಎದ್ದಿದ್ದಾರೆ. ಅವರು ಇತರ ಜನಾಂಗಗಳಿಗಿಂತ ಕೆಟ್ಟವರು.
ಅವರು ತಮ್ಮ ಸುತ್ತಲಿರುವ ಬೇರೆ ದೇಶಗಳಿಗಿಂತ ಹೆಚ್ಚಾಗಿ
ನನ್ನ ಕಟ್ಟಳೆಗಳನ್ನು ಉಲ್ಲಂಘಿಸಿದ್ದಾರೆ. ಅವರು ನನ್ನ
ಆಜ್ಞೆಗಳನ್ನು ತಿರಸ್ಕರಿಸಿದರು. ಅವರು ನನ್ನ ಕಟ್ಟಳೆಗಳನ್ನು
ಅನುಸರಿಸಲಿಲ್ಲ.''

7 ಆದುದರಿಂದ ನನ್ನ ಒಡೆಯನಾದ ಯೆಹೋವನು
ಹೇಳಿದ್ದೇನೆಂದರೆ: ''ನೀವು ಸುತ್ತಲಿರುವ ಜನಾಂಗಗಳಿ
ಗಿಂತ ಹೆಚ್ಚು ಕೆಡುಕನ್ನು ಮಾಡಿದ್ದೀರಿ. ನೀವು ನನ್ನ
ಆಜ್ಞೆಗಳಿಗೆ ವಿಧೇಯರಾಗಲಿಲ್ಲ; ನನ್ನ ಕಟ್ಟಳೆಗಳನ್ನು
ಅನುಸರಿಸಲಿಲ್ಲ. ನಿಮ್ಮ ಸುತ್ತಲಿರುವ ಜನಾಂಗಗಳ
ನಿಯಮಗಳನ್ನೂ ಅನುಸರಿಸಲಿಲ್ಲ.'' 8 ಆದುದರಿಂದ ನನ್ನ
ಒಡೆಯನಾದ ಯೆಹೋವನು ಇಂತೆನ್ನುತ್ತಾನೆ: ''ನಾನು
ನಿಮಗೆ ವಿರೋಧವಾಗಿದ್ದೇನೆ. ಬೇರೆ ಜನರ ಕಣ್ಣೆದುರಿ
ನಲ್ಲಿಯೇ ನಿಮ್ಮನ್ನು ದಂಡಿಸುವೆನು. 9 ನಿಮ್ಮ ಎಲ್ಲಾ ಅಸಹ್ಯ
ಕಾರ್ಯಗಳ ದೆಸೆಯಿಂದ ನಾನು ಹಿಂದೆಂದೂ ಮಾಡಿ
ಲ್ಲದ, ಮುಂದೆಂದೂ ಮಾಡದ ಸಂಗತಿಗಳನ್ನು ನಿಮಗೆ
ಬರಮಾಡುವೆನು. 10 ಜೆರುಸಲೇಮಿನ ಜನರು ಹಸಿವೆ ತಾಳ
ಲಾರದೆ ತಮ್ಮ ಸ್ವಂತ ಮಕ್ಕಳನ್ನು ಕಬಳಿಸುವರು ಮತ್ತು
ಮಕ್ಕಳು ತಮ್ಮ ತಂದೆತಾಯಿಗಳನ್ನೇ ತಿನ್ನುವರು. ಬೇರೆ
ಬೇರೆ ರೀತಿಯಲ್ಲಿ ನಾನು ನಿಮ್ಮನ್ನು ಶಿಕ್ಷಿಸುವೆನು. ಜೀವ
ದಿಂದುಳಿದವರನ್ನು ನಾನು ಗಾಳಿಗೆ ತೂರಿಬಿಡುವೆನು.''

11 ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ಜೆರುಸಲೇಮೇ, ನನ್ನ ಜೀವದಾಣೆ! ನಾನು ನಿನ್ನನ್ನು
ಶಿಕ್ಷಿಸುವೆನು. ಯಾಕೆಂದರೆ ನೀನು ನನ್ನ ಪವಿತ್ರ ಸ್ಥಳಕ್ಕೆ
ಮಹತ್ವವನ್ನು ಕೊಡಲಿಲ್ಲ. ಅಸಹ್ಯವಾದ ಮತ್ತು ಗಾಬರಿ

ಗೊಳಿಸುವ ನಿನ್ನ ಎಲ್ಲಾ ಕಾರ್ಯಗಳಿಂದ ನೀನು ಅದನ್ನು
ಅಶುದ್ಧಗೊಳಿಸಿರುವಿ. ನಾನು ನಿನಗೆ ಕನಿಕರ ತೋರಿಸದೆ
ಶಿಕ್ಷಿಸುವೆನು. ನಿನ್ನ ಮೇಲೆ ನನಗೆ ದಯೆಯಿರದು. 12ನಿಮ್ಮ
ಜನರಲ್ಲಿ ಮೂರನೆ ಒಂದು ಭಾಗ ಪಟ್ಟಣದೊಳಗೆ ರೋಗ
ದಿಂದಲೂ ಹಸಿವಿನಿಂದಲೂ ಸಾಯುವರು. ಮೂರರಲ್ಲಿ
ಇನ್ನೊಂದು ಭಾಗ ಪಟ್ಟಣದ ಹೊರಗೆ ರಣರಂಗದಲ್ಲಿ
ಸಾಯುವರು. ಅನಂತರ ನಾನು ನನ್ನ ಖಡ್ಗವನ್ನು ಇರಿದು
ಉಳಿದವರನ್ನು ಬಹುದೂರದ ದೇಶಕ್ಕೆ ಅಟ್ಟಿಬಿಡುವೆನು.
13ಆಗಲೇ ನನ್ನ ಕೋಪವು ಶಮನವಾಗುವುದು. ನಾನು
ಅವರ ವಿರುದ್ಧವಾಗಿ ನನ್ನ ಕೋಪವನ್ನು ಬಳಸಿ ತೃಪ್ತನಾಗು
ವೆನು. ನನ್ನ ಕೋಪವನ್ನು ಸುರಿದಾಗ, ಯೆಹೋವನಾದ
ನಾನೇ ಅವರೊಂದಿಗೆ ಕೋಪದಿಂದ ಮಾತಾಡಿದೆನೆಂದು
ಅವರಿಗೆ ಗೊತ್ತಾಗುವುದು.''

14ದೇವರು ಹೇಳಿದ್ದೇನೆಂದರೆ, ''ಜೆರುಸಲೇಮೇ,
ನಾನು ನಿನ್ನನ್ನು ನಾಶಮಾಡುವೆನು. ನೀನು ಕಲ್ಲುಗಳ
ರಾಶಿಯಾಗಿ ಹೋಗುವಿ. ನಿನ್ನ ಸುತ್ತಲೂ ಇರುವ
ಜನಾಂಗಗಳು ನಿನ್ನನ್ನು ಗೇಲಿ ಮಾಡುತ್ತವೆ. ನಿನ್ನನ್ನು ದಾಟಿ
ಹೋಗುವ ಪ್ರತಿಯೊಬ್ಬನೂ ನಿನ್ನನ್ನು ಹಾಸ್ಯಮಾಡುವನು.
15ನಿನ್ನ ಸುತ್ತಲೂ ಇರುವ ಜನಾಂಗಗಳು ನಿನಗೆ ಅವಮಾನ
ಮಾಡಿ ಗೇಲಿ ಮಾಡುತ್ತವೆ. ನೀನು ಅವರಿಗೆ ಎಚ್ಚರಿಕೆ
ಯಾಗಿಯೂ ಭಯೋತ್ಪಾದಕಕಾರಿಯಾಗಿಯೂ ಇರುವಿ.
ನಾನು ನನ್ನ ಮಹಾಕೋಪದಿಂದ ನಿನ್ನನ್ನು ದಂಡಿಸಿದಾಗ
ಇದು ಸಂಭವಿಸುವುದು. ಯೆಹೋವನಾದ ನಾನೇ
ಇದನ್ನು ಹೇಳಿದ್ದೇನೆ. 16ಬರಗಾಲವೆಂಬ ಮರಣ
ಕರವಾದ ಮತ್ತು ನಾಶಕರವಾದ ಬಾಣಗಳಿಂದ ನಾನು
ನಿನ್ನನ್ನು ನಾಶಗೊಳಿಸುವದಕ್ಕಾಗಿಯೇ ಹೊಡೆಯುತ್ತೇನೆ.
ನಾನು ನಿನ್ನ ದೇಶಕ್ಕೆ ಕ್ಷಾಮದ ಮೇಲೆ ಕ್ಷಾಮವನ್ನು ಬರ
ಮಾಡುವೆನು ಮತ್ತು ನಿನ್ನ ಆಹಾರ ಸರಬರಾಜನ್ನು ನಿಲ್ಲಿಸು
ವೆನು. 17ನಾನು ನಿನಗೆ ವಿರುದ್ಧವಾಗಿ ಬರಗಾಲಗಳನ್ನು
ಮತ್ತು ಕ್ರೂರ ಪ್ರಾಣಿಗಳನ್ನು ಕಳುಹಿಸುವೆನು. ಅವು ನಿನ್ನ
ಮಕ್ಕಳನ್ನು ಕೊಲ್ಲುತ್ತವೆ. ನಿನ್ನನ್ನು ಕೊಲ್ಲುವುದಕ್ಕಾಗಿ
ರೋಗಗಳನ್ನು, ಹಿಂಸೆಯನ್ನು ಮತ್ತು ಯುದ್ಧಗಳನ್ನು
ಕಳುಹಿಸುವೆನು. ಯೆಹೋವನಾದ ನಾನೇ ಇದನ್ನು
ಹೇಳಿದ್ದೇನೆ. ಮತ್ತು ಇದು ನೆರವೇರುತ್ತದೆ.''

6 ಮತ್ತೆ ಯೆಹೋವನ ಸಂದೇಶವು ನನಗೆ ಬಂದಿತು.
2ಆತನು ಹೇಳಿದ್ದೇನೆಂದರೆ, ''ನರಪುತ್ರನೇ, ಇಸ್ರೇ
ಲಿನ ಪರ್ವತಗಳ ಕಡೆಗೆ ಮುಖ ಮಾಡು. ಅವರಿಗೆ ವಿರುದ್ಧ
ವಾಗಿ ನನಗೋಸ್ಕರ ಮಾತನಾಡಿ ಹೀಗೆ ಹೇಳು:

3''ಇಸ್ರೇಲಿನ ಪರ್ವತಗಳೇ, ನನ್ನ ಒಡೆಯನಾದ
ಯೆಹೋವನ ಸಂದೇಶಕ್ಕೆ ಕಿವಿಗೊಡಿರಿ. ಬೆಟ್ಟಗಳಿಗೂ,
ಪರ್ವತಗಳಿಗೂ, ಕೊರಕಲುಗಳಿಗೂ ಕಣಿವೆಗಳಿಗೂ ನನ್ನ
ಒಡೆಯನಾದ ಯೆಹೋವನು ಹೇಳುವದೇನೆಂದರೆ,
'ನಾನು ವೈರಿಯನ್ನು ನಿನ್ನ ವಿರುದ್ಧ ಯುದ್ಧ ಮಾಡಲು
ಕಳುಹಿಸುವೆನು. ನಿನ್ನ ಎಲ್ಲಾ ಉನ್ನತ ಸ್ಥಳಗಳನ್ನು
ನಾಶಮಾಡುವೆನು. 4ನಿನ್ನ ಯಜ್ಞವೇದಿಕೆಗಳು ನಾಶ
ವಾಗುವವು. ನಿನ್ನ ಧೂಪವೇದಿಕೆಗಳು ಕೆಡವಲ್ಪಡುವವು.
ನಿನ್ನ ಹೆಣಗಳನ್ನು ನಿನ್ನ ಹೊಲಸು ವಿಗ್ರಹಗಳ ಮುಂದೆ
ಬಿಸಾಡುವೆನು. 5ಇಸ್ರೇಲ್ ಜನರ ಸತ್ತ ಹೆಣಗಳನ್ನು ಅವರ
ಹೊಲಸು ವಿಗ್ರಹಗಳ ಮುಂದೆ ಹಾಕುವೆನು. ನಿಮ್ಮ
ಎಲುಬುಗಳನ್ನು ನಿಮ್ಮ ಯಜ್ಞವೇದಿಗಳ ಸುತ್ತಲೂ
ಹರಡುವೆನು. 6ನಿಮ್ಮ ಜನರು ವಾಸಮಾಡುವಲ್ಲೆಲ್ಲಾ ಕೆಟ್ಟ
ಸಂಗತಿಗಳು ನಡೆಯುವವು; ಪಟ್ಟಣಗಳು ಕಲ್ಲಿನ ರಾಶಿಗ
ಳಾಗುವವು; ಪೂಜಾಸ್ಥಳಗಳು ನಾಶಮಾಡಲ್ಪಡುವವು.
ನಿಮ್ಮ ಯಜ್ಞವೇದಿಕೆಗಳು ಕೆಡವಲ್ಪಟ್ಟು ಹಾಳಾಗಿ ಹೋಗು
ವವು; ನಿಮ್ಮ ವಿಗ್ರಹಗಳು ಮುರಿಯಲ್ಪಟ್ಟು ನಾಶವಾಗು
ವವು. ಜನರು ಅವುಗಳನ್ನು ಇನ್ನು ಎಂದಿಗೂ ಪೂಜಿಸರು.
ನಿಮ್ಮ ಧೂಪವೇದಿಕೆಗಳು ಕತ್ತರಿಸಲ್ಪಡುವವು. ನೀವು
ಮಾಡಿಕೊಂಡ ವಿಗ್ರಹಗಳು ಅಳಿದು ಹೋಗುವವು.
7ಜನರು ನಿಮ್ಮ ಮಧ್ಯದಲ್ಲಿ ಕೊಲ್ಲಲ್ಪಟ್ಟು ಬೀಳುವರು.
ಆಗ ನೀನು, 'ನಾನು ಯೆಹೋವನೆಂದು ತಿಳಿಯುವಿ.'''

8ದೇವರು ಹೇಳಿದ್ದೇನೆಂದರೆ: ''ಆದರೆ ನಾನು ನಿಮ್ಮ
ಜನರಲ್ಲಿ ಕೆಲವರನ್ನು ಉಳಿದುಕೊಳ್ಳುವಂತೆ ಮಾಡು
ವೆನು. ನೀವು ಬೇರೆ ದೇಶಗಳಲ್ಲಿ ಚದರಿ ಹೋಗಿರುವಾಗ
ಜನಾಂಗಗಳ ಮಧ್ಯದಲ್ಲಿ ನಿಮ್ಮಲ್ಲಿ ಕೆಲವರು ಕೊಲ್ಲಲ್ಪ
ಡುವುದಿಲ್ಲ. 9ಆಗ ಉಳಿದವರು ಸೆರೆಹಿಡಿಯಲ್ಪಡುವರು.
ಅವರು ಪರದೇಶಕ್ಕೆ ಒಯ್ಯಲ್ಪಟ್ಟು ಅಲ್ಲಿ ವಾಸಿಸುವರು.
ಅಲ್ಲಿ ಅಳಿದುಳಿದ ಜನರು ನನ್ನನ್ನು ಜ್ಞಾಪಿಸಿಕೊಳ್ಳುವರು
ಮತ್ತು ಅವರ ಅಪನಂಬಿಗಸ್ತಿಕೆಯ ಹೃದಯದಿಂದ ನಾನು
ಜಜ್ಜಲ್ಪಟ್ಟಿದ್ದೆನು. ತಾವು ಮಾಡಿದ ಕೆಟ್ಟ ಕೆಲಸಗಳಿಗಾಗಿ
ತಮ್ಮನ್ನು ತಾವೇ ದ್ವೇಷಿಸುವರು. ಹಿಂದಿನ ಕಾಲದಲ್ಲಿ
ಅವರು ನನ್ನಿಂದ ದೂರವಾಗಿ ನನ್ನನ್ನು ತ್ಯಜಿಸಿದರು. ತಮ್ಮ
ಹೊಲಸು ವಿಗ್ರಹಗಳ ಹಿಂದೆ ಹೋದರು. ಗಂಡನನ್ನು
ಬಿಟ್ಟು ಬೇರೆ ಪುರುಷನ ಸಂಗಡ ಓಡುವ ಸ್ತ್ರೀಯಂತೆ
ಅವರಿದ್ದರು. ಅವರು ಇನ್ನೂ ಅನೇಕ ಅಸಹ್ಯಕರವಾದ
ಕಾರ್ಯಗಳನ್ನು ಮಾಡಿದರು. 10ನಾನೇ ಯೆಹೋವ
ನೆಂದು ಅವರಿಗೆ ತಿಳಿಯುವುದು. ಈ ಆಪತ್ತನ್ನು ಬರ
ಮಾಡುವೆನು ಎಂದು ನಾನು ಹೇಳಿದ್ದಕ್ಕೆ ಸರಿಯಾದ
ಕಾರಣವಿತ್ತೆಂದು ಅವರು ಗ್ರಹಿಸಿಕೊಳ್ಳುವರು.''

11ನನ್ನ ಒಡೆಯನಾದ ಯೆಹೋವನು ಇದನ್ನು ಹೇಳಿ
ದನು: ''ಚಪ್ಪಾಳೆ ತಟ್ಟು, ನಿನ್ನ ಕಾಲುಗಳನ್ನು ನೆಲಕ್ಕೆ ಒದ್ದು,
''ಅಯ್ಯೋ, ಬೇಡ!'' ಎಂದು ಹೇಳು. ಯಾಕೆಂದರೆ
ಇಸ್ರೇಲ್ ಜನರು ಎಲ್ಲಾ ಅಸಹ್ಯಕರವಾದ ಮತ್ತು ದುಷ್ಟ
ಕಾರ್ಯಗಳನ್ನು ಮಾಡಿದ್ದಾರೆ. ಅವರು ಯುದ್ಧದ
ಲ್ಲಿಯೂ, ಕ್ಷಾಮದಿಂದಲೂ ಭಯಂಕರವಾದ ಕಾಯಿಲೆ

ಗಳಿಂದಲೂ ಸಾಯುವರು. 12ದೂರದಲ್ಲಿರುವ ಜನರು
ರೋಗಗಳಿಂದ ಸಾಯುವರು. ಹತ್ತಿರದಲ್ಲಿರುವವರು ಕತ್ತಿ
ಯಿಂದ ಸಾಯುವರು. ತಪ್ಪಿಸಿಕೊಂಡವರೂ ಉಳಿಸಲ್ಪಟ್ಟ
ವರೂ ಹಸಿವೆಯಿಂದ ಸಾಯುವರು. ಆಗಲೇ ನನ್ನ
ಕೋಪವು ಶಮನವಾಗುವದು. 13ಆಗಲೇ ನಾನು
ಯೆಹೋವನೆಂದು ನೀವು ಅರಿಯುವಿರಿ. ಅವರ ದೇಶ
ದಲ್ಲಿರುವವರ ಹೆಣಗಳು ಅವರ ಹೊಲಸು ವಿಗ್ರಹಗಳ
ಸುತ್ತಲೂ ಯಜ್ಞವೇದಿಗಳ ಸುತ್ತಲೂ ಎತ್ತರವಾದ ಸ್ಥಳಗಳ
ಮೇಲೆಯೂ ಬೆಟ್ಟಗಳಲ್ಲಿಯೂ ಮತ್ತು ಪ್ರತಿಯೊಂದು
ಹಸಿರು ಮರದ ಕೆಳಗೂ ಬೀಳುವಾಗ ನಾನೇ ಯೆಹೋವ
ನೆಂದು ಅವರು ತಿಳಿದುಕೊಳ್ಳುವರು. ಅವರು ಈ ಎಲ್ಲಾ
ಸ್ಥಳಗಳಲ್ಲಿ ತಮ್ಮ ಎಲ್ಲಾ ಹೊಲಸು ವಿಗ್ರಹಗಳಿಗೆ ಪರಿಮಳ
ಭರಿತವಾದ ಯಜ್ಞಗಳನ್ನು ಅರ್ಪಿಸಿದರು. 14ನಾನು ಅವರ
ಮೇಲೆ ನನ್ನ ಕೈ ಎತ್ತಿ ಅವರನ್ನು ದಂಡಿಸುವೆನು ಮತ್ತು
ಮರುಭೂಮಿಯಿಂದ ದಿಬ್ಲದವರೆಗೆ ಅವರು ಯಾವುದೇ
ದೇಶದಲ್ಲಿ ವಾಸವಾಗಿದ್ದರೂ ನಾಶಮಾಡುವೆನು. ಆಗ
ನಾನೇ ಯೆಹೋವನೆಂಬುದು ಅವರಿಗೆ ತಿಳಿಯುವುದು.’’

7 ಯೆಹೋವನ ಸಂದೇಶವು ನನಗೆ ಬಂದಿತು. 2ಆತನು
ಹೇಳಿದ್ದೇನೆಂದರೆ: ‘‘ನರಪುತ್ರನೇ, ನನ್ನ ಒಡೆಯ
ನಾದ ಯೆಹೋವನ ಸಂದೇಶವಿದು. ಈ ಸಂದೇಶವನ್ನು
ಇಸ್ರೇಲ್ ದೇಶಕ್ಕೆ ನೀಡು.

ಅಂತ್ಯ, ಅಂತ್ಯವು ಬರುವದು. ಇಡೀ ದೇಶವು
ಹಾಳಾಗಿ ಹೋಗುವದು.
3 ನಿನ್ನ ಅಂತ್ಯವು ಈಗ ಬರುವದು. ನಿನ್ನ ಮೇಲೆ ನನಗೆ
ಎಷ್ಟು ಕೋಪವಿದೆ ಎಂದು ನಾನು ತೋರಿಸುವೆನು.
ನಿನ್ನ ದುಷ್ಕೃತ್ಯಗಳಿಗಾಗಿ ನಾನು ನಿನ್ನನ್ನು ಶಿಕ್ಷಿಸು
ವೆನು. ನಿನ್ನ ಅಸಹ್ಯ ಕೃತ್ಯಗಳಿಗಾಗಿ ನಾನು ಪ್ರತೀ
ಕಾರ ಮಾಡುವೆನು.
4 ನಿನಗೆ ನಾನು ಇನ್ನು ಕರುಣೆಯನ್ನು ತೋರಿಸೆನು.
ನಿನ್ನ ವಿಷಯದಲ್ಲಿ ನಾನು ದುಃಖಿಸುವದಿಲ್ಲ. ನೀನು
ಮಾಡಿದ ಕೆಟ್ಟಕಾರ್ಯಗಳಿಗಾಗಿ ನಿನ್ನನ್ನು
ಶಿಕ್ಷಿಸುವೆನು. ನೀನು ಅಂಥಾ ಭಯಂಕರ ಕೃತ್ಯ
ಗಳನ್ನು ಮಾಡಿದ್ದೀ. ಈಗ ನಾನೇ ಯೆಹೋವ
ನೆಂದು ನೀನು ತಿಳಿಯುವಿ.’’

5ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ;
‘‘ಒಂದರ ಮೇಲೊಂದು ದುರ್ಘಟನೆಗಳು ನಡೆಯು
ವವು. 6ಅಂತ್ಯವು ಬರುವುದು. ಅದು ಬೇಗನೆ ಬರುವದು.
7ಇಸ್ರೇಲ್ ದೇಶದಲ್ಲಿ ವಾಸಿಸುವ ಜನರೇ, ನಿಮಗೆ ಆಪತ್ತು
ಬರುವದು, ಸಮಯವು ಬರುತ್ತಿದೆ. ದಿನವು ಸಮೀಪಿಸಿದೆ.
ಬೆಟ್ಟಗಳ ಮೇಲೆ ಆನಂದಘೋಷಗಳ ಬದಲು ಯುದ್ಧದ
ಕೂಗಾಟಗಳು ಇರುತ್ತವೆ. 8ಇನ್ನು ಸ್ವಲ್ಪ ಸಮಯದಲ್ಲಿ
ನಾನು ಎಷ್ಟು ಸಿಟ್ಟುಗೊಂಡಿದ್ದೇನೆ ಎಂದು ನಿಮಗೆ ತೋರಿ
ಸುವೆನು. ನನ್ನ ಕೋಪವನ್ನೆಲ್ಲಾ ನಿಮಗೆ ತೋರಿಸುವೆನು.
ನಿಮ್ಮ ದುಷ್ಕ್ರಿಯೆಗಳಿಗಾಗಿ ನಾನು ನಿಮ್ಮನ್ನು ಶಿಕ್ಷಿಸುವೆನು.
ನಿಮ್ಮ ಅಸಹ್ಯಕೃತ್ಯಗಳಿಗಾಗಿ ನಾನು ಸೇಡನ್ನು ತೀರಿಸಿ
ಕೊಳ್ಳುವೆನು. 9ನಾನು ನಿಮಗೆ ಕರುಣೆ ತೋರಿಸೆನು. ನಿಮ
ಗಾಗಿ ನಾನು ದುಃಖಿಸುವದಿಲ್ಲ. ನೀವು ಮಾಡಿದ
ದುಷ್ಕಾರ್ಯಗಳಿಗಾಗಿ ನಾನು ನಿಮ್ಮನ್ನು ಶಿಕ್ಷಿಸುವೆನು.
ಅಂಥಾ ಭಯಂಕರವಾದ ಕಾರ್ಯಗಳನ್ನು ನೀವು ಮಾಡಿ
ದ್ದೀರಿ. ನಿಮ್ಮನ್ನು ದಂಡಿಸಿದಾತನು ಯೆಹೋವನಾದ
ನಾನೇ ಎಂಬುದು ಆಗ ನಿಮಗೆ ತಿಳಿಯುವುದು.
10‘‘ಆ ಶಿಕ್ಷೆಯ ಸಮಯವು ಬಂದಿದೆ. ಆಪತ್ತು ಬರು
ತ್ತಿದೆ. ಹಿಂಸೆಯು ಅರಳಿದೆ. ದುರಹಂಕಾರವು ಮೊಗ್ಗು
ಬಿಟ್ಟಿದೆ. 11ದುಷ್ಟತನವನ್ನು ದಂಡಿಸಲು ಹಿಂಸೆಯು ಬೆಳೆದು
ಕೋಲಾಗಿದೆ. ಜನರಲ್ಲಿ ಯಾರೂ ಉಳಿಯುವುದಿಲ್ಲ, ಆ
ಜನ ಸಮೂಹದಲ್ಲಿ ಒಬ್ಬರೂ ಉಳಿಯುವುದಿಲ್ಲ. ಅವರ
ಐಶ್ವರ್ಯದಲ್ಲಿ ಏನೂ ಉಳಿಯುವದಿಲ್ಲ; ಪ್ರಮುಖ
ರಾದವರಲ್ಲಿ ಯಾರೂ ಉಳಿಯುವುದಿಲ್ಲ.
12‘‘ಆ ಶಿಕ್ಷೆಯ ಸಮಯವು ಬಂತು. ಆ ದಿವಸವು
ಇಲ್ಲಿಯೇ ಇದೆ. ವಸ್ತುಗಳನ್ನು ಕೊಂಡುಕೊಳ್ಳುವ ಜನರು
ಸಂತೋಷಪಡಕೂಡದು. ವಸ್ತುಗಳನ್ನು ಮಾರುವವರು
ಮಾರುವದಕ್ಕೆ ದುಃಖಿಸಕೂಡದು. ಯಾಕೆಂದರೆ ಆ
ಭಯಂಕರ ಶಿಕ್ಷೆಯು ಎಲ್ಲರಿಗೂ ಉಂಟಾಗುವದು.
13ತಮ್ಮ ಆಸ್ತಿಗಳನ್ನು ಮಾರಿದ ಜನರು ಅಲ್ಲಿಗೆ ತಿರುಗಿ
ಹೋಗುವದಿಲ್ಲ. ಒಬ್ಬನು ಜೀವಂತವಾಗಿ ತಪ್ಪಿಸಿ
ಕೊಂಡರೂ ತನ್ನ ಆಸ್ತಿಗೆ ಹೋಗುವದಿಲ್ಲ. ಯಾಕೆಂದರೆ
ಈ ದರ್ಶನವು ಎಲ್ಲಾ ಜನಸಮೂಹಕ್ಕಾಗಿದೆ. ಇದು ಬದ
ಲಾಗುವದಿಲ್ಲ; ಅವರ ಪಾಪಗಳ ದೆಸೆಯಿಂದ ಅವರಲ್ಲಿ
ಒಬ್ಬನಾದರೂ ತನ್ನ ಪ್ರಾಣವನ್ನು ಕಾಪಾಡಿ
ಕೊಳ್ಳುವುದಿಲ್ಲ.
14‘‘ಅವರು ಜನರನ್ನು ಎಚ್ಚರಿಸುವದಕ್ಕಾಗಿ ತುತ್ತೂರಿ
ಯನ್ನು ಊದುವರು. ಜನರು ಯುದ್ಧಕ್ಕೆ ತಯಾರಾಗು
ವರು. ಆದರೆ ಅವರು ರಣರಂಗಕ್ಕೆ ಹೋಗುವದಿಲ್ಲ.
ಯಾಕೆಂದರೆ ಆ ಜನಸಮೂಹಕ್ಕೆ ನಾನು ಎಷ್ಟು ಸಿಟ್ಟು
ಗೊಂಡಿದ್ದೇನೆ ಎಂಬುದನ್ನು ತೋರಿಸುತ್ತೇನೆ. 15ಖಡ್ಗ
ಧಾರಿಯಾದ ವೈರಿಯು ಪಟ್ಟಣದ ಹೊರಗಿದ್ದಾನೆ. ರೋಗ
ಮತ್ತು ಹಸಿವೆ ಪಟ್ಟಣದೊಳಗಿವೆ. ಒಬ್ಬನು ಹೊರಗೆ
ಹೊಲದ ಬಳಿ ಹೋದರೆ ವೈರಿ ಸೈನಿಕನು ಅವನನ್ನು
ಕೊಲ್ಲುವನು. ಪಟ್ಟಣದೊಳಗೆಯೇ ಉಳಿದರೆ ರೋಗ
ಮತ್ತು ಹಸಿವೆಯು ಅವನನ್ನು ಕೊಲ್ಲುವದು.
16‘‘ಆದರೂ ಕೆಲವರು ತಪ್ಪಿಸಿಕೊಳ್ಳುವರು. ಅವರು
ಬೆಟ್ಟಕ್ಕೆ ಓಡುವರು. ಆದರೆ ಅವರು ಸಂತೋಷ

ಪಡುವದಿಲ್ಲ. ತಮ್ಮ ಪಾಪಗಳಿಗಾಗಿ ಅವರು ದುಃಖಿತ
ರಾಗುವರು. ಪಾರಿವಾಳಗಳಂತೆ ಮೂಲುಗುವರು, ಅಳು
ವರು. 17ತಮ್ಮ ಕೈಗಳನ್ನು ಮೇಲಕ್ಕೆ ಎತ್ತುವಷ್ಟು ದುಃಖ
ಮತ್ತು ಆಯಾಸ ಅವರಲ್ಲಿದೆ. ಅವರ ಕಾಲುಗಳು ನೀರಿ
ನಂತಿರುತ್ತವೆ. 18ಅವರು ಶೋಕಬಟ್ಟೆಗಳನ್ನು ಧರಿಸಿ
ಭಯಗ್ರಸ್ತರಾಗುವರು. ಪ್ರತೀ ಮುಖದಲ್ಲಿ ನಾಚಿಕೆಯು
ಕಾಣಿಸುವದು. ತಮ್ಮ ದುಃಖವನ್ನು ಪ್ರದರ್ಶಿಸಲು ತಮ್ಮ
ತಲೆಗಳನ್ನು ಬೋಳಿಸುವರು. 19ಅವರು ತಮ್ಮ ಬೆಳ್ಳಿಯ
ವಿಗ್ರಹಗಳನ್ನು ರಸ್ತೆಗೆ ಬಿಸಾಡುವರು, ಅವರು ಬಂಗಾರದ
ವಿಗ್ರಹವನ್ನು ಅಶುದ್ಧ ವಸ್ತುವಿನಂತೆ ನೋಡುವರು.
ಯೆಹೋವನು ತನ್ನ ಕೋಪವನ್ನು ತೋರಿಸುವ ದಿನದಲ್ಲಿ
ಅವರ ಬೆಳ್ಳಿಬಂಗಾರಗಳ ವಿಗ್ರಹಗಳು ಅವರನ್ನು ರಕ್ಷಿಸ
ಲಾರವು. ಅವು ಅವರ ಹಸಿವನ್ನು ನೀಗಿಸಲಾರವು ಅಥವಾ
ಅವರ ಹೊಟ್ಟೆಗಳನ್ನು ತುಂಬಿಸಲಾರವು. ಜನರು ಪಾಪ
ದಲ್ಲಿ ಬೀಳುವಂತೆ ಅವರು ಮಾಡಿದರು.

20‘‘ಆ ಜನರು ತಮ್ಮ ಬೆಳ್ಳಿ ಬಂಗಾರಗಳ ಆಭರಣ
ಗಳನ್ನು ಅಲಂಕಾರದ ವಸ್ತುಗಳನ್ನಾಗಿ ಪರಿವರ್ತಿಸಿದರು.
ಅವುಗಳಿಂದ ತಮ್ಮ ಕೊಳಕಾದ ಮತ್ತು ಅಸಹ್ಯಕರವಾದ
ವಿಗ್ರಹಗಳನ್ನು ಮಾಡಿಕೊಂಡರು. ಆದ್ದರಿಂದ ಅವರ ಬೆಳ್ಳಿ
ಬಂಗಾರಗಳನ್ನು ಅವರಿಗೆ ಕೊಳೆಯ ಬಟ್ಟೆಯನ್ನಾಗಿ
ಮಾಡುವೆನು. 21ಬೇರೆ ದೇಶದವರು ಅವರ ಐಶ್ವರ್ಯ
ವನ್ನು ಲೂಟಿಮಾಡಿಕೊಂಡು ಹೋಗಲು ನಾನು ಅವ
ಕಾಶಕೊಡುವೆನು. ಭೂಮಿಯ ಮೇಲಿರುವ ಅತ್ಯಂತ
ದುಷ್ಟರಾದ ಜನರಿಗೆ ನಾನು ಅದನ್ನು ಕೊಳ್ಳೆಯನ್ನಾಗಿ
ಕೊಡುವೆನು. ಅವರು ಅದನ್ನು ಹೊಲಸು ಮಾಡುವರು.
22ನಾನು ಅವರ ಕಡೆಯಿಂದ ನನ್ನ ಮುಖವನ್ನು ತಿರುಗಿಸಿ
ಕೊಳ್ಳುವೆನು. ಆ ಪರದೇಶಿಯರು ನನ್ನ ಅಮೂಲ್ಯವಾದ
ಆಲಯವನ್ನು ಹೊಲಸು ಮಾಡುವರು. ದರೋಡೆ
ಕೋರರು ಅದರೊಳಗೆ ನುಗ್ಗಿ ಅದಕ್ಕೆ ಅಪಮಾನ
ಮಾಡುವರು. 23‘‘ಸೆರೆಯವರಿಗಾಗಿ ಸರಪಣಿಗಳನ್ನು
ಮಾಡು. ದೇಶವು ಕೊಲೆಯ ಅಪರಾಧಗಳಿಂದ ತುಂಬಿದೆ.
ಪಟ್ಟಣದಲ್ಲಿ ಹಿಂಸೆಯು ತುಂಬಿದೆ. 24ಇಸ್ರೇಲ್ ಜನರ
ಮನೆಗಳನ್ನು ಸ್ವಾಧೀನಪಡಿಸಿಕೊಳ್ಳಲು ಅತೀ ದುಷ್ಟ
ಜನಾಂಗಗಳನ್ನು ಬರಮಾಡುವೆನು. ನಾನು ಗರ್ವಿಷ್ಠರ
ಸೊಕ್ಕನ್ನು ಮುರಿಯುವೆನು; ಅವರ ಆರಾಧನೆಯ
ಸ್ಥಳಗಳು ಅಪರಿಶುದ್ಧಗೊಳ್ಳುವವು.

25‘‘ಜನರು ಭಯದಿಂದ ನಡುಗುವರು. ಅವರು
ಶಾಂತಿಗಾಗಿ ಹುಡುಕುವರು, ಆದರೆ ಅವರಿಗೆ ಅದು ಸಿಗು
ವುದಿಲ್ಲ. 26ಒಂದರಮೇಲೊಂದು ಆಪತ್ತು ಸಂಭವಿಸು
ವುದು. ಸುಳ್ಳುಸುದ್ದಿಗೊಂದು ಸುಳ್ಳುಸುದ್ದಿ ಸೇರಿಕೊಳ್ಳು
ವುದು. ಅವರು ಪ್ರವಾದಿಯಿಂದ ದರ್ಶನಕ್ಕಾಗಿ ಹುಡುಕು
ತ್ತಲೇ ಇರುವರು. ಆದರೆ ಯಾವ ದರ್ಶನಗಳೂ ಆಗುವ
ದಿಲ್ಲ. ಜನರಿಗೆ ಉಪದೇಶಿಸಲು ಯಾಜಕರಲ್ಲಿ ಏನೂ
ಇರುವುದಿಲ್ಲ. ಜನರಿಗೆ ಕೊಡಲು ಹಿರಿಯರಲ್ಲಿ ಯಾವ
ಬುದ್ಧಿವಾದವೂ ಇರುವದಿಲ್ಲ. 27ಸತ್ತುಹೋದ ಜನರಿ
ಗಾಗಿ ನಿಮ್ಮ ರಾಜನು ಗೋಳಾಡುವನು; ನಾಯಕನಿಗೆ
ನಿರೀಕ್ಷೆಯು ಇಲ್ಲವಾಗುವುದು. ಸಾಮಾನ್ಯ ಜನರು ಭಯ
ಗ್ರಸ್ತರಾಗುವರು. ಯಾಕೆಂದರೆ ನಾನು ಅವರ ನಡತೆಗೆ
ತಕ್ಕಂತೆ ಅವರಿಗೆ ಮಾಡುವೆನು; ಅವರು ಬೇರೆಯವರಿಗೆ
ನ್ಯಾಯ ತೀರಿಸಿದಂತೆ ನಾನೂ ಅವರಿಗೆ ನ್ಯಾಯ ತೀರಿಸು
ವೆನು. ನಾನೇ ಯೆಹೋವನೆಂದು ಆಗ ಅವರು ತಿಳಿದು
ಕೊಳ್ಳುವರು.’’

8 ಒಂದು ದಿವಸ ನಾನು ನನ್ನ ಮನೆಯಲ್ಲಿ ಕುಳಿತು
ಕೊಂಡಿದ್ದೆನು. ಯೆಹೂದದ ನಾಯಕರು ನನ್ನ
ಮುಂದೆ ಕುಳಿತಿದ್ದರು. ಇದು ಸೆರೆಹಿಡಿದ ಐದನೇ ವರ್ಷದ,
ಐದನೇ ತಿಂಗಳಿನ, ಐದನೇ ದಿವಸವಾಗಿತ್ತು. ಥಕ್ಕನೆ ನನ್ನ
ಒಡೆಯನಾದ ಯೆಹೋವನ ಆತ್ಮನಿಂದ ನಾನು ಪರವಶ
ನಾದೆನು. 2ಮನುಷ್ಯನಂತೆ ಕಾಣುತ್ತಿದ್ದ ರೂಪವೊಂದನ್ನು
ನಾನು ನೋಡಿದೆನು. ಅದರ ಸೊಂಟದಿಂದಿಡಿದು ಕೆಳ
ಭಾಗದವರೆಗೆ ಬೆಂಕಿಯಂತೆ ಕಾಣುತ್ತಿತ್ತು. ಸೊಂಟದಿಂದ
ಮೇಲ್ಭಾಗದವರೆಗೆ ಕಾದಲೋಹದಂತೆ ಹೊಳೆಯುತ್ತಿತ್ತು.
3ಆಗ ಅದು ಕೈಯಂತಿದ್ದ ಒಂದನ್ನು ಚಾಚಿ ನನ್ನ ತಲೆಯ
ಕೂದಲನ್ನು ಹಿಡಿದುಕೊಂಡಿತು. ಬಳಿಕ ಆತ್ಮವು ನನ್ನನ್ನು
ಮೇಲಕ್ಕೆ ಎತ್ತಿ ದಿವ್ಯದರ್ಶನದಲ್ಲಿ ಜೆರುಸಲೇಮಿಗೆ
ಕೊಂಡೊಯ್ಯಿತು. ಅದು ನನ್ನನ್ನು ಒಳದ್ವಾರಕ್ಕೆ ಕೊಂಡೊ
ಯ್ಯಿತು. ಇದು ಉತ್ತರ ದಿಕ್ಕಿನಲ್ಲಿತ್ತು. ದೇವರನ್ನು
ಸಿಟ್ಟಿಗೆಬ್ಬಿಸುವ ವಿಗ್ರಹವು ಈ ದ್ವಾರದ ಬಳಿ ಇತ್ತು.
4ಇಸ್ರೇಲಿನ ದೇವರ ಮಹಿಮೆಯು ಅಲ್ಲಿ ಇತ್ತು. ಆ
ಮಹಿಮೆ ನಾನು ಕೆಬಾರ್ ಕಾಲುವೆಯ ಪಕ್ಕದ ಕಣಿವೆ
ಯಲ್ಲಿ ಕಂಡ ದರ್ಶನದಂತಿತ್ತು.

5ದೇವರು ನನ್ನೊಂದಿಗೆ ಮಾತನಾಡುತ್ತಾ, ‘‘ನರ
ಪುತ್ರನೇ, ಉತ್ತರ ದಿಕ್ಕಿಗೆ ನೋಡು’’ ಎಂದು ಹೇಳಿದನು.
ನಾನು ಉತ್ತರ ದಿಕ್ಕಿಗೆ ನೋಡಿದಾಗ, ದೇವರನ್ನು ರೋಷ
ಗೊಳಿಸುವ ವಿಗ್ರಹವು ಯಜ್ಞವೇದಿಕೆಯ ದ್ವಾರದ ಉತ್ತರ
ದಿಕ್ಕಿನಲ್ಲಿರುವ ಪ್ರವೇಶದ ಸ್ಥಳದಲ್ಲಿ ಇತ್ತು.

6ಆಗ ದೇವರು ನನಗೆ, ‘‘ನರಪುತ್ರನೇ, ನನ್ನನ್ನು ನನ್ನ
ಆಲಯದಿಂದ ಓಡಿಸಲು ಇಲ್ಲಿ ಇಸ್ರೇಲರು ಮಾಡುತ್ತಿ
ರುವ ಭಯಂಕರವಾದ ಕಾರ್ಯಗಳು ನಿನಗೆ ಕಾಣುತ್ತಿ
ಲ್ಲವೇ? ಆದರೆ ಇದಕ್ಕಿಂತಲೂ ಹೆಚ್ಚಿನ ದುಷ್ಟಕಾರ್ಯ
ಗಳನ್ನು ನೀನು ನೋಡುವೆ’’ ಎಂದು ಹೇಳಿದನು.

7ಬಳಿಕ ಆತನು ನನ್ನನ್ನು ಅಂಗಳದ ದ್ವಾರಕ್ಕೆ ತಂದನು.
ನಾನು ಗೋಡೆಯಲ್ಲಿದ್ದ ಒಂದು ರಂಧ್ರವನ್ನು ಕಂಡೆನು.
8ಆಗ ದೇವರು ನನಗೆ, ‘‘ನರಪುತ್ರನೇ, ಗೋಡೆಯ ರಂಧ್ರ
ವನ್ನು ಅಗೆದು ದೊಡ್ಡದನ್ನಾಗಿ ಮಾಡು’’ ಎಂದು

ಹೇಳಿದನು. ನಾನು ಗೋಡೆಯನ್ನು ಅಗೆದೆನು. ಆಗ ಬಾಗಿಲೊಂದು ನನಗೆ ಕಾಣಿಸಿತು.

9ಆಗ ದೇವರು ನನಗೆ, ‘‘ಜನರು ಇಲ್ಲಿ ಮಾಡುತ್ತಿರುವ ಅಸಹ್ಯವಾದ ದುಷ್ಟಕಾರ್ಯಗಳನ್ನು ಹೋಗಿ ನೋಡು’’ ಎಂದು ಹೇಳಿದನು. 10ನಾನು ಒಳಗೆ ಹೋದಾಗ, ಗೋಡೆಗಳ ಮೇಲೆಲ್ಲಾ ಕೆತ್ತಲ್ಪಟ್ಟಿದ್ದ ಎಲ್ಲಾ ಬಗೆಯ ಕ್ರಿಮಿಕೀಟಗಳನ್ನು ಮತ್ತು ಅಸಹ್ಯಕರವಾದ ಪ್ರಾಣಿಗಳ ವಿಗ್ರಹಗಳನ್ನು ಕಂಡೆನು.

11ನಾನು ಅಲ್ಲಿ ಶಾಫಾನನ ಮಗನಾದ ಯಾಜನ್ಯನು ಮತ್ತು ಇಸ್ರೇಲರ ಎಪ್ಪತ್ತು ಮಂದಿ ಹಿರಿಯರು ಈ ಚಿತ್ರಗಳ ಮತ್ತು ವಿಗ್ರಹಗಳ ಮುಂದೆ ನಿಂತಿರುವುದನ್ನು ಕಂಡೆನು. ಪ್ರತಿಯೊಬ್ಬನು ಒಂದು ಧೂಪಾರತಿಯನ್ನು ಹಿಡಿದುಕೊಂಡಿದ್ದನು. ಆ ಧೂಪದ ಹೊಗೆಯು ಆಕಾಶದವರೆಗೂ ಏರಿ ಹೋಗುತ್ತಿತ್ತು. 12ಆಗ ದೇವರು ನನಗೆ, ‘‘ನರಪುತ್ರನೇ, ಇಸ್ರೇಲಿನ ಹಿರಿಯರು ಕತ್ತಲೆಯಲ್ಲಿ ಮಾಡುತ್ತಿರುವುದು ನಿನಗೆ ಕಾಣುತ್ತಿದೆಯೋ? ಅವರಲ್ಲಿ ಪ್ರತಿಯೊಬ್ಬನಿಗೆ ಒಂದೊಂದು ವಿಶೇಷ ಕೋಣೆಯಿದೆ. ಅದರೊಳಗೆ ಅವರ ದೇವರ ವಿಗ್ರಹಗಳನ್ನಿಟ್ಟುಕೊಂಡಿದ್ದಾರೆ. ಅವರು, ‘ಯೆಹೋವನು ನಮ್ಮನ್ನು ನೋಡುವದಿಲ್ಲ. ಆತನು ಈ ದೇಶವನ್ನು ತೊರೆದು ಬಿಟ್ಟಿದ್ದಾನೆ’ ಎಂದು ತಮ್ಮೊಳಗೆ ಹೇಳಿಕೊಳ್ಳುತ್ತಿದ್ದಾರೆ’’ ಎಂದನು. 13ಬಳಿಕ ದೇವರು ನನಗೆ, ‘‘ನೀನು ನನ್ನೊಂದಿಗೆ ಬಂದರೆ, ಜನರು ಮಾಡುವ ಇನ್ನೂ ಭಯಂಕರ ಸಂಗತಿಗಳನ್ನು ನೀನು ನೋಡುವೆ’’ ಎಂದು ಹೇಳಿದನು.

14ಆಗ ದೇವರು ನನ್ನನ್ನು ಯೆಹೋವನಾಲಯದ ಉತ್ತರ ದ್ವಾರದ ಪ್ರವೇಶ ಸ್ಥಳಕ್ಕೆ ನಡೆಸಿದನು. ಅಲ್ಲಿ ಹೆಂಗಸರು ಕುಳಿತುಕೊಂಡು ರೋಧಿಸುವದನ್ನು ನೋಡಿದೆನು. ಅವರು ತಮ್ಮೂಜ್ ಎಂಬ ಸುಳ್ಳುದೇವರಿಗಾಗಿ ದುಃಖಪಡುತ್ತಿದ್ದರು.

15ದೇವರು ನನಗೆ, ‘‘ನರಪುತ್ರನೇ, ಈ ದುರಾಚಾರಗಳನ್ನು ನೋಡಿದ್ದೀಯಾ? ನನ್ನೊಂದಿಗೆ ಬಾ, ಇವುಗಳಿಗಿಂತ ಇನ್ನೂ ಹೆಚ್ಚಿನ ಭಯಂಕರ ಸಂಗತಿಗಳನ್ನು ನಿನಗೆ ತೋರಿಸುವೆನು’’ ಎಂದನು. 16ದೇವರು ನನ್ನನ್ನು ಯೆಹೋವನಾಲಯದ ಒಳಗಿನ ಅಂಗಳಕ್ಕೆ ಕರಕೊಂಡು ಹೋದನು. ಯೆಹೋವನಾಲಯದ ಪ್ರವೇಶ ಸ್ಥಳದಲ್ಲಿ ಮಂಟಪಕ್ಕೂ ಯಜ್ಞವೇದಿಕೆಗೂ ನಡುವೆ ಪವಿತ್ರ ಸ್ಥಳದ ಕಡೆಗೆ ಬೆನ್ನು ಮಾಡಿಕೊಂಡಿದ್ದ ಇಪ್ಪತ್ತೈದು ಮಂದಿ ಇದ್ದರು. ಪೂರ್ವಕ್ಕೆ ಮುಖಮಾಡಿಕೊಂಡಿದ್ದ ಅವರು ಸೂರ್ಯನನ್ನು ಪೂಜಿಸುತ್ತಿದ್ದರು.

17ಆಗ ದೇವರು ನನಗೆ, ‘‘ನರಪುತ್ರನೇ, ಅವರು ಮಾಡುತ್ತಿರುವುದು ನಿನಗೆ ಕಾಣುತ್ತಿದೆಯೋ? ಯೆಹೂದದ ಜನರಿಗೆ ತಾವು ಮಾಡುತ್ತಿರುವ ಈ ಭಯಂಕರ ಕಾರ್ಯಗಳು ಸಾಕಾಗಿಲ್ಲ. ಇಡೀ ದೇಶವು ದುಷ್ಟತನದಿಂದ ತುಂಬಿಹೋಗಿದೆ. ಅವರು ನನ್ನನ್ನು ಇನ್ನೂ ಹೆಚ್ಚಿಗೆ ಕೋಪಗೊಳಿಸುತ್ತಿದ್ದಾರೆ. ವಿಗ್ರಹಾರಾಧನೆಯ ಪ್ರತೀಕವಾಗಿ ತಮ್ಮ ಮೂಗುಗಳಿಗೆ ಎಳೆಯ ಕೊಂಬೆಗಳನ್ನು ಸೋಕಿಸುತ್ತಾರೆ. 18ಅವರಿಗೆ ನಾನು ನನ್ನ ರೌದ್ರವನ್ನು ತೋರಿಸುವೆನು. ಅವರಿಗೆ ನಾನು ಕರುಣೆಯನ್ನು ಎಂದಿಗೂ ತೋರಿಸುವದಿಲ್ಲ. ಅವರಿಗಾಗಿ ನಾನು ದುಃಖಿಸುವದೂ ಇಲ್ಲ. ಅವರು ನನ್ನನ್ನು ಕೂಗುವರು ಆದರೆ ನಾನು ಅವರಿಗೆ ಕಿವಿಗೊಡುವದಿಲ್ಲ.’’

9 ಆಮೇಲೆ ದೇವರು ಗಟ್ಟಿಯಾದ ಧ್ವನಿಯಿಂದ ಕರೆಯುವುದು ನನಗೆ ಕೇಳಿಸಿತು: ‘‘ಪಟ್ಟಣವನ್ನು ದಂಡಿಸಲು ನೇಮಕಗೊಂಡಿರುವವರೇ, ಇಲ್ಲಿಗೆ ಬನ್ನಿ. ನಿಮ್ಮಲ್ಲಿ ಪ್ರತಿಯೊಬ್ಬರೂ ನಾಶದ ಆಯುಧವನ್ನು ನಿಮ್ಮ ಕೈಯಲ್ಲಿ ಹಿಡಿದುಕೊಂಡು ಬನ್ನಿ.’’ 2ಆಗ ಆರು ಮಂದಿ ಪುರುಷರು ಉತ್ತರದಿಕ್ಕಿನಲ್ಲಿದ್ದ ಮೇಲಿನ ದ್ವಾರದ ಮಾರ್ಗದಿಂದ ಬರುತ್ತಿರುವುದನ್ನು ನಾನು ನೋಡಿದೆನು. ಪ್ರತಿಯೊಬ್ಬನ ಕೈಯಲ್ಲಿ ಮಾರಕ ಅಸ್ತ್ರವಿತ್ತು. ಅವರಲ್ಲೊಬ್ಬನು ನಾರುಮಡಿಯನ್ನು ಧರಿಸಿದ್ದನು. ಅವನ ಸೊಂಟದಲ್ಲಿ ಲೇಖಕನ ಸಾಮಗ್ರಿಯ ಚಿಕ್ಕ ಚೀಲವಿತ್ತು. ಅವರು ಆಲಯದೊಳಗಿದ್ದ ತಾಮ್ರದ ವೇದಿಕೆಯ ಬಳಿ ಹೋಗಿ ನಿಂತುಕೊಂಡರು.

3ಆಗ ಇಸ್ರೇಲರ ದೇವರ ಮಹಿಮೆಯು ತಾನು ಆಸನಾರೊಢನಾಗಿದ್ದ ಕೆರೂಬಿ ದೂತರ ಮೇಲಿನಿಂದ ಏರಿ ದೇವಾಲಯದ ಪ್ರವೇಶ ಸ್ಥಳಕ್ಕೆ ಹೋಯಿತು. ಆ ಮಹಿಮೆಯು ನಾರುಮಡಿಯನ್ನು ಧರಿಸಿದ್ದ, ಲೇಖಕನ ಸಾಮಗ್ರಿಯ ಚಿಕ್ಕ ಚೀಲವನ್ನು ಹೊಂದಿದ್ದ ಪುರುಷನನ್ನು ಕರೆಯಿತು.

4ಆಗ ಯೆಹೋವನು ಅವನಿಗೆ, ‘‘ಜೆರುಸಲೇಮ್ ನಗರದಲ್ಲೆಲ್ಲಾ ತಿರುಗಾಡು. ಜೆರುಸಲೇಮಿನಲ್ಲಿ ನಡೆಯುತ್ತಿರುವ ಅಸಹ್ಯವಾದ ದುಷ್ಕೃತ್ಯಗಳ ಬಗ್ಗೆ ನರಳಾಡುತ್ತಿರುವವರ ಮತ್ತು ನಿಟ್ಟುಸಿರುಬಿಡುತ್ತಿರುವವರ ಹಣೆಯ ಮೇಲ್ಗಡೆ ಒಂದು ಗುರುತನ್ನಿಡು’’ ಎಂದು ಹೇಳಿದನು.

5-6ಬಳಿಕ ದೇವರು ಅಲ್ಲಿದ್ದ ಉಳಿದವರಿಗೆ, ‘‘ಮೊದಲನೆಯವನನ್ನು ಹಿಂಬಾಲಿಸಿರಿ. ಹಣೆಗಳ ಮೇಲೆ ಗುರುತಿಲ್ಲದ ಜನರನ್ನು ಕೊಂದು ನಾಶಪಡಿಸಿರಿ. ಯಾವ ಮರುಕವನ್ನಾಗಲೀ, ಕನಿಕರವನ್ನಾಗಲೀ ತೋರದೆ ವೃದ್ಧರನ್ನೂ ಯೌವನಸ್ಥರನ್ನೂ ಯುವತಿಯರನ್ನೂ ಸ್ತ್ರೀಯರನ್ನೂ ಮಕ್ಕಳನ್ನೂ ಕೊಲ್ಲಿರಿ. ಆದರೆ ಹಣೆಯ ಮೇಲೆ ಗುರುತು ಹೊಂದಿರುವ ಯಾರನ್ನೂ ಮುಟ್ಟಬೇಡಿ. ಇದನ್ನು ನನ್ನ ಆಲಯದಿಂದಲೇ ಆರಂಭಿಸಿ’’ ಎಂದು ಹೇಳಿದನು. ಆದ್ದರಿಂದ ಅವರು ಆಲಯದ ಮುಂದೆ ಇದ್ದ ಹಿರಿಯರನ್ನು ಕೊಲ್ಲುವುದರ ಮೂಲಕ ಈ ಕೆಲಸವನ್ನು ಆರಂಭಿಸಿದರು.

7ದೇವರು ಅವರಿಗೆ ಹೇಳಿದ್ದೇನೆಂದರೆ, ''ಈ ಆಲಯ
ವನ್ನು ಹೊಲೆ ಮಾಡಿರಿ. ಆಲಯದ ಅಂಗಳವನ್ನು
ಹೆಣಗಳಿಂದ ತುಂಬಿಸಿರಿ. ಈಗ ಹೊರಡಿ.'' ಅವರು
ಹೊರಟು ಹೋಗಿ ನಗರದ ಜನರನ್ನು ಕೊಂದರು.

8ಅವರು ಜನರನ್ನು ಕೊಲ್ಲಲು ಹೊರಟಾಗ ನಾನೊ
ಬ್ಬನೇ ಅಲ್ಲಿದ್ದೆನು. ನಾನು ಬಾಗಿ ನಮಸ್ಕರಿಸಿ, ''ಅಯ್ಯೋ,
ನನ್ನ ಒಡೆಯನಾದ ಯೆಹೋವನೇ, ನೀನು ಜೆರುಸಲೇ
ಮಿನ ಮೇಲೆ ನಿನ್ನ ಕೋಪವನ್ನು ಪ್ರದರ್ಶಿಸುವಾಗ ಉಳಿ
ಯಲ್ಪಟ್ಟ ಇಸ್ರೇಲರನ್ನು ನೀನು ನಿರ್ಮೂಲ
ಮಾಡುತ್ತೀ!'' ಎಂದು ಹೇಳಿದೆನು.

9ಅದಕ್ಕೆ ದೇವರು, ''ಇಸ್ರೇಲ್ ಮತ್ತು ಯೆಹೂದ ವಂಶ
ದವರ ದೋಷವು ಬಹಳ ಹೆಚ್ಚಾಗಿದೆ. ಈ ದೇಶದಲ್ಲಿ
ಎಲ್ಲೆಲ್ಲಿಯೂ ಕೊಲೆಗಳು ನಡೆಯುತ್ತಿವೆ. ಈ ನಗರವು
ಅಪರಾಧಗಳಿಂದ ತುಂಬಿಹೋಗಿದೆ. ಯಾಕೆಂದರೆ
ಜನರು ಹೀಗಂದುಕೊಳ್ಳುತ್ತಿದ್ದಾರೆ, 'ಯೆಹೋವನು ಈ
ದೇಶವನ್ನು ಬಿಟ್ಟುಹೋಗಿದ್ದಾನೆ. ನಾವು ಮಾಡುತ್ತಿರು
ವಂಥದ್ದನ್ನು ಅವನು ನೋಡುವದಿಲ್ಲ.' 10ಅವರಿಗೆ ನಾನು
ಕನಿಕರ ತೋರಿಸುವದಿಲ್ಲ. ಅವರಿಗಾಗಿ ನಾನು ದುಃಖಿಸು
ವದಿಲ್ಲ. ಅವರು ತಾವೇ ಇದನ್ನು ತಮ್ಮ ಮೇಲೆ ಬರಮಾಡಿ
ಕೊಂಡರು. ಅವರು ಹೊಂದಲು ಯೋಗ್ಯವಾದ ಶಿಕ್ಷೆ
ಯನ್ನೇ ನಾನು ಕೊಡುತ್ತಿರುವದು.''

11ಆಗ ನಾರುಬಟ್ಟೆಯನ್ನು ಧರಿಸಿಕೊಂಡು ಲೇಖಕನ
ಸಾಮಗ್ರಿಯ ಚಿಕ್ಕ ಚೀಲವನ್ನು ಸೊಂಟಕ್ಕೆ ಕಟ್ಟಿ
ಕೊಂಡಿದ್ದವನು, ''ನೀನು ಆಜ್ಞಾಪಿಸಿದ ಮೇರೆಗೆ ನಾನು
ಮಾಡಿದೆ'' ಅಂದನು.

10 ಕೆರೂಬಿಯರ ತಲೆಗಳ ಮೇಲಿದ್ದ ಗುಮ್ಮಟದ
ಕಡೆಗೆ ನೋಡಿದೆನು. ಆ ಗುಮ್ಮಟದ ಮೇಲೆ
ನೀಲಮಣಿಯಿಂದ ಮಾಡಿದ ಸಿಂಹಾಸನದಂತೆ ಕಾಣು
ತ್ತಿದ್ದ ಏನೋ ಇತ್ತು. 2ಆಗ ಸಿಂಹಾಸನದಲ್ಲಿ ಕೂತಿದ್ದಾತನು
ನಾರುಮಡಿ ಧರಿಸಿದ್ದವನಿಗೆ, ''ಕೆರೂಬಿದೂತರ ಕೆಳಗಿ
ರುವ ಚಕ್ರಗಳ ನಡುವೆ ಹೋಗು. ಕೆರೂಬಿಗಳ ನಡುವೆ
ಇರುವ ಉರಿಯುವ ಕೆಂಡಗಳನ್ನು ನಿನ್ನ ಅಂಗೈಗಳಲ್ಲಿ
ತುಂಬಿಕೊಂಡು ಜೆರುಸಲೇಮ್ ನಗರದ ಮೇಲೆ
ಹರಡು'' ಎಂದು ಹೇಳಿದನು.

ನಾನು ನೋಡುತ್ತಿರಲು ಆ ಮನುಷ್ಯನು ಒಳಗೆ
ಹೋದನು. 3ಆ ಮನುಷ್ಯನು ಚಕ್ರಗಳ ನಡುವೆ ಒಳಗೆ
ಹೋದಾಗ ಕೆರೂಬಿದೂತರು ಆಲಯದ ದಕ್ಷಿಣಕ್ಕೆ
ಇರುವ ಸ್ಥಳದಲ್ಲಿ ನಿಂತಿದ್ದರು. ಒಳಗಿನ ಅಂಗಳವು ಮೋಡ
ದಿಂದ ತುಂಬಿತ್ತು. 4ಯೆಹೋವನ ಮಹಿಮೆಯು
ಕೆರೂಬಿದೂತರ ಮೇಲಿನಿಂದ ಹೊರಟು ಆಲಯದ
ಹೊಸ್ತಿಲಿಗೆ ಬಂದಿತು. ಆಗ ಮೋಡವು ಆಲಯದಲ್ಲಿ
ತುಂಬಿಕೊಂಡಿತು. ಯೆಹೋವನ ಮಹಿಮೆಯ ಪ್ರಕಾಶವು
ಇಡೀ ಅಂಗಳವನ್ನು ತುಂಬಿಕೊಂಡಿತು. 5ಕೆರೂಬಿದೂತರ
ರೆಕ್ಕೆಗಳ ಬಡಿತದ ಶಬ್ದವು ಹೊರಗಿನ ಪ್ರಾಕಾರದ ತನಕ
ಕೇಳುತ್ತಿದ್ದವು. ಅದು ತುಂಬಾ ಜೋರಿನ ಶಬ್ದವಾಗಿತ್ತು.
ಸರ್ವಶಕ್ತನಾದ ದೇವರು ಮಾತ ನಾಡುವಾಗ ಆಗುವ
ಗುಡುಗಿನ ಶಬ್ದದಂತಿತ್ತು. 6ನಾರುಮಡಿ ಧರಿಸಿಕೊಂಡಿದ್ದ
ವನಿಗೆ ದೇವರು, ''ಕೆರೂಬಿದೂತರ ಮಧ್ಯದೊಳಗಿಂದ,
ಚಕ್ರಗಳ ಮಧ್ಯೆ ಪ್ರವೇಶಿಸಿ ಅಲ್ಲಿಂದ ಉರಿಯುವ ಕೆಂಡ
ಗಳನ್ನು ತೆಗೆದುಕೊ'' ಎಂದು ಆಜ್ಞಾಪಿಸಿದಾಗ, ಆ
ಮನುಷ್ಯನು ಅಲ್ಲಿಗೆ ಹೋಗಿ ಚಕ್ರಗಳ ಸಮೀಪದಲ್ಲಿ
ನಿಂತುಕೊಂಡನು. 7ಕೆರೂಬಿದೂತರಲ್ಲೊಬ್ಬನು ಅವರ
ಮಧ್ಯೆಯಿದ್ದ ಉರಿಯುವ ಕೆಂಡದಲ್ಲಿ ಸ್ವಲ್ಪವನ್ನು ಆ
ಮನುಷ್ಯನ ಕೈಗೆ ಸುರಿದನು. ಆ ಮನುಷ್ಯನು ಅಲ್ಲಿಂದ
ಹೊರಟನು. 8ಕೆರೂಬಿದೂತರ ರೆಕ್ಕೆಯ ಕೆಳಗೆ ಮನುಷ್ಯರ
ಕೈಗಳಂತೆ ಕಾಣುತ್ತಿದ್ದ ಕೈಗಳಿದ್ದವು.

9ಆಗ ನಾನು ಅಲ್ಲಿ ನಾಲ್ಕು ಚಕ್ರಗಳಿರುವದನ್ನು
ಕಂಡೆನು. ಪ್ರತೀ ಕೆರೂಬಿ ದೂತನ ಬಳಿ ಒಂದು ಚಕ್ರವು
ಇತ್ತು. ಆ ಚಕ್ರಗಳು ಹೊಳೆಯುವ ಹಳದಿ ರತ್ನದಂತೆ
ಕಂಡವು. 10ಅಲ್ಲಿದ್ದ ನಾಲ್ಕು ಚಕ್ರಗಳೂ ಒಂದೇ ಪ್ರಕಾರ
ವಾಗಿದ್ದವು. ಅವು ಚಕ್ರದೊಳಗೆ ಚಕ್ರಗಳಿದ್ದಂತೆ
ತೋರುತ್ತಿದ್ದವು. 11ಅವು ಚಲಿಸುವಾಗ ನಾಲ್ಕು ದಿಕ್ಕು
ಗಳಲ್ಲಿ ಯಾವ ದಿಕ್ಕಿಗಾದರೂ ಅತ್ತಿತ್ತ ತಿರುಗದೆ ಚಲಿಸು
ತ್ತಿದ್ದವು. 12ಅವರ ಶರೀರದ ಮೇಲೆಲ್ಲಾ ಕಣ್ಣುಗಳಿದ್ದವು.
ಅವರ ಬೆನ್ನಿನ ಮೇಲೆ, ಕೈಗಳ ಮೇಲೆ, ರೆಕ್ಕೆಗಳ ಮೇಲೆ,
ಅವರ ಚಕ್ರಗಳ ಮೇಲೆ ಕಣ್ಣುಗಳಿದ್ದವು. ಹೌದು, ಅವರ
ನಾಲ್ಕು ಚಕ್ರಗಳ ಮೇಲೂ ಕಣ್ಣುಗಳಿದ್ದವು. 13ಈ
ಚಕ್ರಗಳಿಗೆ ''ಚರಕ ಚಕ್ರ''ಎಂಬದಾಗಿ ಕರೆಯುತ್ತಾ
ರೆಂದು ನನಗೆ ಕೇಳಿಸಿತು.

14ಪ್ರತೀ ಕೆರೂಬಿ ದೂತನಿಗೆ ನಾಲ್ಕು ಮುಖಗಳಿದ್ದವು.
ಮೊದಲನೇ ಮುಖವು ಕೆರೂಬಿಯ ಮುಖ. ಎರಡನೆ
ಯದು ಮನುಷ್ಯನ ಮುಖ,ಮೂರನೇದು ಸಿಂಹದ ಮುಖ
ಮತ್ತು ನಾಲ್ಕನೇದು ಗರುಡನ ಮುಖ. 15ಈ ಜೀವಿಗಳು
ಮೊದಲು ನಾನು ಕೆಬಾರ್ ನದಿಯ ಬಳಿ ಕಂಡ
ದರ್ಶನದಲ್ಲಿದ್ದ ಕೆರೂಬಿಯರೇ ಆಗಿರಬೇಕು ಎಂದು ಆಗ
ನನಗೆ ಮನದಟ್ಟಾಯಿತು.

ಬಳಿಕ ಕೆರೂಬಿಗಳು ಮೇಲಕ್ಕೆ ಏರಿದವು. 16ಅವುಗ
ಳೊಂದಿಗೆ ಚಕ್ರಗಳು ಎತ್ತಲ್ಪಟ್ಟವು. ಕೆರೂಬಿ ದೂತರು
ರೆಕ್ಕೆಗಳನ್ನು ಚಾಚಿ ಗಾಳಿಯಲ್ಲಿ ಹಾರಿದಾಗ ಅವುಗಳ ಪಕ್ಕ
ದಲ್ಲಿದ್ದ ಚಕ್ರಗಳು ತಮ್ಮ ಸ್ಥಳವನ್ನು ಬದಲಾಯಿಸಲಿಲ್ಲ.
17ಕೆರೂಬಿದೂತರು ಗಾಳಿಯಲ್ಲಿ ಹಾರಾಡಿದಾಗ
ಚಕ್ರಗಳೂ ಅವರೊಂದಿಗೆ ಹೋದವು. ಅವು ನಿಂತಾಗ
ಚಕ್ರಗಳೂ ನಿಂತುಬಿಡುತ್ತಿದ್ದವು. ಯಾಕೆಂದರೆ ಜೀವಿ
ಗಳನ್ನು ಹತೋಟಿಯಲ್ಲಿಡುವ ಆತ್ಮವು ಚಕ್ರಗಳಲ್ಲಿತ್ತು.

18ಆಗ ಆಲಯದ ಹೊಸ್ತಿಲಿನ ಮೇಲಿನಿಂದ
ಯೆಹೋವನ ಮಹಿಮೆಯು ಎದ್ದು ಕೆರೂಬಿದೂತರು
ನಿಂತಿದ್ದ ಸ್ಥಳದ ಮೇಲೆ ನಿಂತುಕೊಂಡಿತು. 19ಕೆರೂಬಿ
ದೂತರು ರೆಕ್ಕೆಗಳನ್ನು ಚಾಚಿ ಹಾರಿದವು. ಅವು ಆಲಯ
ವನ್ನು ಬಿಟ್ಟುಹೋಗುವದನ್ನು ನೋಡಿದೆನು. ಚಕ್ರಗಳು
ಅವುಗಳೊಂದಿಗೆ ಹೋದವು. ಅವು ಯೆಹೋವನಾಲ
ಯದ ಪೂರ್ವದ ಬಾಗಿಲ ಬಳಿ ನಿಂತವು. ಇಸ್ರೇಲಿನ
ದೇವರ ಮಹಿಮೆಯು ಅವುಗಳ ಮೇಲೆ ಇತ್ತು.

20ಆಗ ಕೆಬಾರ್ ನದಿಯ ಬಳಿ ನನಗಾದ ಇಸ್ರೇಲಿನ
ದೇವರ ಮಹಿಮೆಯ ದರ್ಶನದಲ್ಲಿ ನಾನು ಕಂಡ ಜೀವಿ
ಗಳು ಕೆರೂಬಿದೂತರೇ ಎಂದು ತಿಳಿಯಿತು. 21ಪ್ರತಿ
ಯೊಂದಕ್ಕೂ ನಾಲ್ಕು ಮುಖಗಳೂ, ನಾಲ್ಕು ರೆಕ್ಕೆಗಳೂ
ಮತ್ತು ಅವುಗಳ ರೆಕ್ಕೆಗಳ ಕೆಳಗೆ ಮನುಷ್ಯನ ಕೈಗಳಂತಿದ್ದ
ಕೈಗಳೂ ಇದ್ದವು. 22ನಾನು ಕೆಬಾರ್ ಕಾಲುವೆಯ ಪಕ್ಕ
ದಲ್ಲಿ ಕಂಡ ಜೀವಿಗಳ ಮುಖಗಳಂತೆಯೇ ಕೆರೂಬಿ
ದೂತರ ಮುಖಗಳಿದ್ದವು. ಪ್ರತಿಯೊಂದು ನೇರವಾಗಿ
ಮುಂದೆ ಸಾಗಿದವು.

11 ಆಗ ಆತ್ಮವು ನನ್ನನ್ನು ಯೆಹೋವನಾಲಯದ
ಪೂರ್ವದ ಬಾಗಿಲಿಗೆ ಕೊಂಡೊಯ್ಯಿತು. ಬಾಗಿ
ಲಿನ ಪ್ರವೇಶ ಸ್ಥಳದಲ್ಲಿ ನಾನು ಇಪ್ಪತ್ತೈದು ಮಂದಿ ಜನ
ರನ್ನು ನೋಡಿದೆನು. ಅವರಲ್ಲಿ ಅಜ್ಜೂರನ ಮಗನಾದ
ಯಾಜನ್ಯನನ್ನು, ಬೆನಾಯನ ಮಗನಾದ ಪೆಲತ್ಯನನ್ನು
ನಾನು ನೋಡಿದೆನು. ಅವರಿಬ್ಬರು ಜನರಿಗೆ ನಾಯಕ
ರಾಗಿದ್ದರು.

2ಆಗ ದೇವರು ನನ್ನೊಂದಿಗೆ ಮಾತನಾಡಿ ಹೇಳಿದ್ದೇ
ನೆಂದರೆ, ''ನರಪುತ್ರನೇ, ಈ ಪಟ್ಟಣದಲ್ಲಿ ದುಷ್ಟ
ಯೋಜನೆಗಳನ್ನು ಮಾಡುವವರೂ ಕೆಡುಕಿನ ಸಲಹೆ
ಗಳನ್ನು ನೀಡುವವರೂ ಇವರೇ. 3ಮನೆಗಳನ್ನು ಕಟ್ಟುವ
ಅಗತ್ಯ ಈಗಿಲ್ಲ. ಪಟ್ಟಣವು ಅಡಿಗೆ ಮಾಡಲ್ಪಡುತ್ತಿರುವ
ಮಡಕೆಯಂತಿದೆ ಮತ್ತು ನಾವು ಮಾಂಸದಂತಿದ್ದೇವೆ''
ಎಂದು ಸುಳ್ಳು ಹೇಳುತ್ತಿದ್ದಾರೆ. 4ಆದುದರಿಂದ ನೀನು ನನ್ನ
ಪರವಾಗಿ ಅವರೊಂದಿಗೆ ಮಾತನಾಡಬೇಕು. ನರ
ಪುತ್ರನೇ, ನೀನು ಹೋಗಿ ಅವರಿಗೆ ದೈವವಾಣಿ ನುಡಿ.''

5ಆಗ ಯೆಹೋವನ ಆತ್ಮನು ನನ್ನ ಮೇಲೆ ಬಂದನು.
ಆತನು ಹೇಳಿದ್ದೇನೆಂದರೆ, ''ಯೆಹೋವನು ಹೀಗೆ ಹೇಳು
ತ್ತಾನೆಂದು ಆ ಜನರಿಗೆ ತಿಳಿಸು: ಇಸ್ರೇಲ್ ಮನೆತನವೇ,
ನೀನು ದೊಡ್ಡದೊಡ್ಡ ವಿಷಯಗಳನ್ನು ಆಲೋಚಿಸುತ್ತೀ.
ನೀನು ಏನು ಯೋಚಿಸುತ್ತೀ ಎಂದು ನಾನು ಬಲ್ಲೆನು.
6ನೀನು ಈ ನಗರದಲ್ಲಿ ಅನೇಕ ಜನರನ್ನು ಕೊಲೆ
ಮಾಡಿರುತ್ತೀ. ರಸ್ತೆಗಳನ್ನು ಹೆಣಗಳಿಂದ ತುಂಬಿಸಿರುತ್ತೀ.
7ಈಗ ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, 'ಆ ಹೆಣಗಳು ಮಾಂಸದಂತಿವೆ. ನಗರವು ಮಡಕೆ
ಯಂತಿದೆ. ಆದರೆ ನಾನು ನಿಮ್ಮನ್ನು ಸುರಕ್ಷಿತವಾದ ಆ
ಮಡಕೆಯಿಂದ ತೆಗೆದುಬಿಡುವೆನು. 8ನೀನು ಖಡ್ಗಕ್ಕೆ
ಭಯಪಡುವವನಾದರೂ ನಾನು ನಿನ್ನ ಮೇಲೆ ಖಡ್ಗವನ್ನು
ತರುವೆನು. ನಮ್ಮ ಒಡೆಯನಾದ ಯೆಹೋವನು ಈ
ಮಾತುಗಳನ್ನು ನುಡಿದಿರುವದರಿಂದ ಇದು
ನಡೆಯುವದು.'''

9ದೇವರು ಮುಂದುವರಿಸುತ್ತಾ, ''ಈ ನಗರದೊಳ
ಗಿಂದ ನಿಮ್ಮನ್ನು ಹೊರಡಿಸಿ ನಿಮ್ಮನ್ನು ಪರದೇಶಿಯರಿಗೆ
ವಶಪಡಿಸುತ್ತೇನೆ; ಮತ್ತು ನಿಮ್ಮನ್ನು ದಂಡಿಸುತ್ತೇನೆ.
10ನೀವು ಕತ್ತಿಯಿಂದಲೇ ಸಾಯುವಿರಿ. ನಾನು ನಿಮ್ಮನ್ನು
ಇಸ್ರೇಲಿನಲ್ಲಿಯೇ ದಂಡಿಸುವೆನು. ನಾನೇ ಯೆಹೋವ
ನೆಂಬುದು ಆಗ ನಿಮಗೆ ತಿಳಿಯುವುದು. 11ಹೌದು, ಈ
ಸ್ಥಳವು ಬೇಯಿಸುವ ಪಾತ್ರೆ. ಮತ್ತು ನೀವು ಆ ಪಾತ್ರೆಯಲ್ಲಿ
ಬೇಯಿಸಲ್ಪಡುವ ಮಾಂಸವಾಗಿರುತ್ತೀರಿ. ನಾನು
ನಿಮ್ಮನ್ನು ಇಸ್ರೇಲಿನಲ್ಲಿಯೇ ಶಿಕ್ಷಿಸುವೆನು. 12ಆಗ ನಾನು
ಯೆಹೋವನು ಎಂದು ನೀವು ತಿಳಿಯುವಿರಿ. ನನ್ನ ಆಜ್ಞೆಗೆ
ನೀವು ಅವಿಧೇಯರಾದಿರಿ. ನನ್ನ ಕಟ್ಟಳೆಗಳಿಗೆ ನೀವು
ವಿಧೇಯರಾಗಲಿಲ್ಲ. ನಿಮ್ಮ ಸುತ್ತಲೂ ಇರುವ ಜನಾಂಗ
ಗಳಂತೆ ಇರಲು ನೀವು ನಿರ್ಧರಿಸಿರುತ್ತೀರಿ.''

13ನಾನು ದೇವರ ಪರವಾಗಿ ಮಾತನಾಡುವದನ್ನು
ನಿಲ್ಲಿಸಿದ ಕೂಡಲೇ, ಬೆನಾಯನ ಮಗನಾದ ಪೆಲತ್ಯನು
ಸತ್ತನು . ನಾನು ನೆಲದ ಮೇಲೆ ಬಗ್ಗಿ, ''ನನ್ನ ಒಡೆಯನಾದ
ಯೆಹೋವನೇ, ನೀನು ಇಸ್ರೇಲಿನಲ್ಲಿ ಅಳಿದುಳಿದವರನ್ನು
ಸಂಪೂರ್ಣವಾಗಿ ನಾಶಮಾಡುವಿಯೋ? ''ಎಂದು
ಗಟ್ಟಿಯಾಗಿ ಕೂಗಿಕೊಂಡೆನು.

14ಯೆಹೋವನ ಸಂದೇಶ ನನಗೆ ದೊರೆಯಿತು:
15''ನರಪುತ್ರನೇ, ಜೆರುಸಲೇಮಿನಲ್ಲಿ ವಾಸವಾಗಿರುವ
ಜನರು ನಿನ್ನ ಸಹೋದರರ, ನಿನ್ನ ಸ್ವಂತ ಸಂಬಂಧಿಕರ
ಮತ್ತು ಇಡೀ ಇಸ್ರೇಲ್ ವಂಶದವರ ಬಗ್ಗೆ ಈಗ ಮಾತಾ
ಡುತ್ತಿದ್ದಾರೆ. 'ಅವರು, ಯೆಹೋವನಿಂದ ದೂರ
ವಾಗಿದ್ದಾರೆ. ಈ ದೇಶವು ನಮಗೆ ನಮ್ಮ ಸ್ವಂತ ಆಸ್ತಿಯಾಗಿ
ಕೊಡಲ್ಪಟ್ಟಿದೆ' ಎಂದು ಅವರು ಹೇಳುತ್ತಾರೆ.

16''ಆದುದರಿಂದ ಜನರಿಗೆ ಹೀಗೆ ಹೇಳು, 'ನಮ್ಮ
ಒಡೆಯನಾದ ಯೆಹೋವನು ಹೇಳುವದೇನಂದರೆ:
''ನಾನು ನನ್ನ ಜನರನ್ನು ಬಹುದೂರದಲ್ಲಿರುವ ಜನಾಂಗ
ಗಳ ಮಧ್ಯಕ್ಕೆ ಹೋಗುವಂತೆ ಮಾಡಿದ್ದು ನಿಜ. ನಾನು
ಅನೇಕ ದೇಶಗಳಲ್ಲಿ ಅವರನ್ನು ಚದರಿಸಿರುತ್ತೇನೆ. ಅವರು
ಪರದೇಶಗಳಲ್ಲಿರುವಾಗ ಸ್ವಲ್ಪ ಕಾಲ ನಾನೇ ಅವರಿಗೆ
ದೇವಾಲಯವಾಗಿರುವೆನು. 17ಆದ್ದರಿಂದ ಹೀಗೆ ಹೇಳು:
ಒಡೆಯನಾದ ಯೆಹೋವನು ಇಂತೆನ್ನುತ್ತಾನೆ: ನಾನು
ನಿಮ್ಮನ್ನು ಜನಾಂಗಗಳಿಂದ ಒಟ್ಟುಗೂಡಿಸುವೆನು; ನೀವು
ಚದರಿಸಲ್ಪಟ್ಟಿರುವ ದೇಶಗಳಿಂದ ನಾನು ನಿಮ್ಮನ್ನು ಒಟ್ಟು

ಗೂಡಿಸುವೆನು; ಮತ್ತು ನಾನು ನಿಮಗೆ ಇಸ್ರೇಲ್
ದೇಶವನ್ನು ಕೊಡುವೆನು. 18ನನ್ನ ಜನರು ಹಿಂದಕ್ಕೆ
ಬಂದಾಗ ದೇಶದಲ್ಲಿರುವ ಎಲ್ಲಾ ಹೊಲಸು ವಿಗ್ರಹ
ಗಳನ್ನು ತೆಗೆದುಹಾಕುವರು. 19ಅವರನ್ನು ಹಿಂದಕ್ಕೆ ಬರ
ಮಾಡಿ ಒಗಟ್ಟಿನಲ್ಲಿರುವಂತೆ ಮಾಡುವೆನು. ಅವರಲ್ಲಿ
ಹೊಸ ಆತ್ಮವನ್ನು ಇರಿಸುವೆನು. ಅವರಲ್ಲಿರುವ ಕಲ್ಲಿನ
ಹೃದಯವನ್ನು ತೆಗೆದು ನಿಜವಾದ ಹೃದಯವನ್ನಿಡುವೆನು.
20ಆಗ ಅವರು ನನ್ನ ಆಜ್ಞಾವಿಧಿಗಳಿಗೆ ವಿಧೇಯರಾಗು
ವರು. ನಾನು ಹೇಳುವದನ್ನು ಅವರು ಮಾಡುವರು.
ಅವರು ನಿಜವಾಗಿಯೂ ನನ್ನ ಜನರಾಗಿರುವರು. ನಾನು
ಅವರ ದೇವರಾಗಿರುವೆನು.'''

21ಆಮೇಲೆ ದೇವರು ಹೇಳಿದ್ದೇನೆಂದರೆ: ''ಆದರೆ ಈಗ
ಅವರ ಹೃದಯವು ಆ ಹೊಲಸು ವಿಗ್ರಹಗಳಿಗೆ ಸೇರಿ
ದ್ದಾಗಿದೆ. ಅವರು ಮಾಡಿದ ದುಷ್ಟತನಕ್ಕೆ ನಾನು ಅವರನ್ನು
ಶಿಕ್ಷಿಸಲೇ ಬೇಕಾಗಿದೆ.'' ನನ್ನ ಒಡೆಯನಾದ ಯೆಹೋ
ವನು ಈ ಸಂಗತಿಗಳನ್ನು ತಿಳಿಸಿದನು. 22ಆಗ ಕೆರೂಬಿ
ದೂತರು ತಮ್ಮ ರೆಕ್ಕೆಗಳನ್ನು ಚಾಚಿ ಆಕಾಶದಲ್ಲಿ ಹಾರಿ
ಹೋದರು. ಚಕ್ರಗಳು ಅವುಗಳೊಂದಿಗೆ ಹೋದವು.
ಮತ್ತು ಇಸ್ರೇಲಿನ ದೇವರ ಮಹಿಮೆಯು ಅವರ ಮೇಲ್ಗಡೆ
ಇತ್ತು. 23ಯೆಹೋವನ ಮಹಿಮೆಯು ಆಕಾಶಕ್ಕೆ
ಎತ್ತಲ್ಪಟ್ಟು ಜೆರುಸಲೇಮಿಗೆ ಪೂರ್ವದಲ್ಲಿರುವ ಬೆಟ್ಟದ
ಮೇಲೆ ನಿಂತಿತು. 24ಆಗ ಆತ್ಮವು ನನ್ನನ್ನು ಆಕಾಶಕ್ಕೆ ಎತ್ತಿ
ಬಾಬಿಲೋನ್ ದೇಶಕ್ಕೆ ಮರಳಿ ತಂದಿತು. ಸೆರೆ ಒಯ್ಯ
ಲ್ಪಟ್ಟಿದ್ದ ಜನರ ಮಧ್ಯೆ ನಾನು ಬಂದೆನು. ದೇವರಾತ್ಮವು
ಕೊಟ್ಟ ದರ್ಶನದಲ್ಲಿ ನಾನು ಆ ಎಲ್ಲಾ ವಿಷಯಗಳನ್ನು
ಕಂಡೆನು. ಬಳಿಕ, ನಾನು ಕಂಡ ಆ ದರ್ಶನವು ನನ್ನನ್ನು
ಬಿಟ್ಟುಹೋಯಿತು. 25ನನ್ನೊಂದಿಗೆ ಸೆರೆವಾಸದಲ್ಲಿದ್ದ
ಜನರಿಗೆ, ಯೆಹೋವನು ನನಗೆ ತೋರಿಸಿದ ಎಲ್ಲಾ
ಸಂಗತಿಗಳ ಬಗ್ಗೆ ಹೇಳಿದೆನು.

12 ಯೆಹೋವನ ಸಂದೇಶವು ನನಗೆ ಬಂದಿತು.
ಆತನು ಹೇಳಿದ್ದೇನೆಂದರೆ: 2''ನರಪುತ್ರನೇ,
ನೀನು ದಂಗೆಕೋರರ ಮಧ್ಯೆ ವಾಸಿಸುತ್ತೀ. ಅವರಿಗೆ ಕಣ್ಣಿ
ದ್ದರೂ ನೋಡುವದಿಲ್ಲ; ಅವರಿಗೆ ಕಿವಿಗಳಿದ್ದರೂ
ಕೇಳುವದಿಲ್ಲ; ಯಾಕೆಂದರೆ ಅವರು ದಂಗೆಕೋರ
ರಾಗಿದ್ದಾರೆ. 3ಆದುದರಿಂದ ನರಪುತ್ರನೇ, ನಿನ್ನ ಚೀಲ
ಗಳನ್ನು ತುಂಬಿಸಿ ಸೆರೆಯಾಳಾಗಿ ಹೋಗುವವನಂತೆ
ನಟಿಸು. ನೀನು ಹಗಲಲ್ಲಿ ಹೋಗುವದನ್ನು ಜನರು
ನೋಡಲಿ. ಸೆರೆಯಾಳಿನಂತೆ ಅವರ ಕಣ್ಣೆದುರಿನಲ್ಲೇ ನಿನ್ನ
ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹೋಗು. ಒಂದು ವೇಳೆ
ಅವರು ತಾವು ದಂಗೆಕೋರರರೆಂದು ತಿಳಿದುಕೊಳ್ಳ
ಬಹುದು. 4ಸೆರೆಯಾಳಾಗಿ ಹೋಗುವವನಂತೆ ಹಗಲಲ್ಲಿ
ನಿನ್ನ ಚೀಲಗಳನ್ನು ಹೊರಗೆ ತೆಗೆದುಕೊಂಡು ಬಾ.
ಸಾಯಂಕಾಲವಾದಾಗ ಅವರ ಕಣ್ಣೆದುರಿನಲ್ಲಿಯೇ ನೀನು
ದೂರದೇಶಕ್ಕೆ ಸೆರೆಯವನಾಗಿ ಹೋಗುವವನಂತೆ ನಟನೆ
ಮಾಡು. 5ಜನರು ನಿನ್ನನ್ನು ನೋಡುತ್ತಿರುವಾಗ ಗೋಡೆ
ಯಲ್ಲಿ ತೂತು ಮಾಡಿ ಅದರಿಂದ ನುಸುಳಿ ಹೊರಗೆ
ಹೋಗು. 6ರಾತ್ರಿ ಕಾಲದಲ್ಲಿ ಚೀಲವನ್ನು ಹೆಗಲಿಗೇರಿಸಿ
ಹೊರಗೆನಡಿ. ನೀನು ನೆಲವನ್ನು ನೋಡಲಾಗದಂತೆ ನಿನ್ನ
ಮುಖವನ್ನು ಮುಚ್ಚಿಕೋ. ಇದೆಲ್ಲಾ ಮಾಡುವಾಗ ಜನರು
ನಿನ್ನನ್ನು ನೋಡುತ್ತಿರಬೇಕು. ಯಾಕೆಂದರೆ ನಿನ್ನನ್ನು
ನಾನು ಇಸ್ರೇಲರಿಗೆ ಒಂದು ನಿದರ್ಶನವಾಗಿ ಉಪ
ಯೋಗಿಸುತ್ತಿದ್ದೇನೆ.''

7ಹೀಗೆ ನನಗೆ ಆಜ್ಞಾಪಿಸಿದ ಪ್ರಕಾರ ಮಾಡಿದೆನು.
ನಾನು ಸೆರೆಯಾಳಿನಂತೆ ಹಗಲಲ್ಲಿ ಚೀಲಗಳನ್ನು ತಂದು
ಹೊರಗಿಟ್ಟೆನು. ಸಾಯಂಕಾಲ ನನ್ನ ಕೈಗಳಿಂದ ಗೋಡೆ
ಯಲ್ಲಿ ತೂತು ಮಾಡಿ, ರಾತ್ರಿ ಕಾಲದಲ್ಲಿ ಆ ಚೀಲಗಳನ್ನು
ಹೆಗಲ ಮೇಲೆ ಹೊತ್ತು ಹೊರಟೆನು. ಜನರು ನನ್ನನ್ನು
ಗಮನಿಸುತ್ತಿರುವಾಗಲೇ ನಾನೆಲ್ಲಾ ಮಾಡಿದೆನು.

8ಮರುದಿನ ಬೆಳಿಗ್ಗೆ ಯೆಹೋವನ ಸಂದೇಶವು ನನಗೆ
ಬಂತು. ಆತನು ಹೀಗೆ ಅಂದನು: 9''ನರಪುತ್ರನೇ, ನೀನು
ಏನು ಮಾಡುತ್ತಿರುವೆ ಎಂದು ಇಸ್ರೇಲಿನ ಈ ದಂಗೆ
ಕೋರರು ನಿನ್ನನ್ನು ಕೇಳಲಿಲ್ಲವೇ? 10ಅವರ ಒಡೆಯ
ನಾದ ಯೆಹೋವನು ಇದನ್ನೆಲ್ಲಾ ಹೇಳಿದನು ಎಂದು
ಅವರಿಗೆ ತಿಳಿಸು. ಈ ಸಂದೇಶವು ಜೆರುಸಲೇಮಿನ ನಾಯ
ಕರ ಮತ್ತು ಅಲ್ಲಿ ವಾಸಿಸುವ ಇಸ್ರೇಲ್ ಜನರ ಕುರಿತಾಗಿದೆ.
11'ನೀನು ಅವರಿಗೆ ಹೀಗೆ ಹೇಳು; ನಾನು ನಿಮಗೆ ಒಂದು
ಸೂಚನೆಯಾಗಿದ್ದೇನೆ. ನಾನು ಮಾಡಿದ ಸೂಚಕ ಕಾರ್ಯ
ಖಂಡಿತವಾಗಿ ನಿಮಗೆ ಸಂಭವಿಸುವುದು. ನೀವು ದೂರ
ದೇಶಕ್ಕೆ ಸೆರೆಯಾಳುಗಳಾಗಿ ಹೋಗುವಿರಿ.' 12ನಿಮ್ಮ
ನಾಯಕನು ಗೋಡೆಯಲ್ಲಿ ತೂತು ಮಾಡಿ ರಾತ್ರಿ ಕಾಲ
ದಲ್ಲಿ ಅದರಲ್ಲಿ ನುಸುಳಿ ಪಾರಾಗುವನು. ಜನರು ತನ್ನನ್ನು
ಗುರುತಿಸದಂತೆ ತನ್ನ ಮುಖವನ್ನು ಮುಚ್ಚಿಕೊಳ್ಳುವನು.
ಅವನು ಎತ್ತ ಹೋಗುತ್ತಿದ್ದಾನೆ ಎಂದು ಅವನ ಕಣ್ಣುಗಳಿಗೆ
ಕಾಣಿಸದೆ ಇರುವದು. 13ಅವನು ತಪ್ಪಿಸಿಕೊಳ್ಳಲು ಪ್ರಯತ್ನ
ಮಾಡುವನು. ಆದರೆ, ನಾನು ( ಯೆಹೋವನು ) ಅವ
ನನ್ನು ಹಿಡಿಯುವೆನು. ಅವನು ನನ್ನ ಬಲೆಯೊಳಗೆ ಬೀಳು
ವನು. ನಾನು ಅವನನ್ನು ಕಸ್ದೀಯರ ದೇಶವಾದ
ಬಾಬಿಲೋನಿಗೆ ತರುವೆನು. ಅವನು ಆ ದೇಶವನ್ನು
ನೋಡುವದಿಲ್ಲ; ಆಲ್ಲದೆ ಅವನು ಅಲ್ಲಿ ಸಾಯುವನು.
14ಅವನ ಸುತ್ತಲೂ ಇರುವವರನ್ನೆಲ್ಲ ನಾನು ಸುತ್ತಮುತ್ತ
ಲಿನ ದೇಶಗಳಿಗೆ ಓಡಿಸಿಬಿಡುವೆನು. ಅವನ ಕೆಲಸಗಾರ
ರನ್ನು ಮತ್ತು ಅವನ ಸೈನ್ಯವನ್ನು ಗಾಳಿಗೆ ತೂರಿಬಿಡುವೆನು.
ಮತ್ತು ಅವರನ್ನು ಖಡ್ಗದೊಡನೆ ಬೆನ್ನಟ್ಟುವೆನು. 15ನಾನೇ
ಯೆಹೋವನೆಂದು ಆಗ ಜನರು ತಿಳಿದುಕೊಳ್ಳುವರು;

ಯಾಕೆಂದರೆ ನಾನು ಅವರನ್ನು ಜನಾಂಗಗಳ ಮಧ್ಯದಲ್ಲಿ
ಚದರಿಸಿದ್ದೇನೆ ಮತ್ತು ಬೇರೆ ದೇಶಗಳಿಗೆ ಓಡಿಸಿದ್ದೇನೆ.

16‘‘ಆದರೆ ನಾನು ಅವರಲ್ಲಿ ಕೆಲವರನ್ನು ಯುದ್ಧಗ
ಳಿಂದ, ಬರಗಾಲಗಳಿಂದ, ಮತ್ತು ರೋಗಗಳಿಂದ
ಉಳಿಸುವೆನು. ಅವರು ತಾವು ಹೋಗುವ ದೇಶಗಳಲ್ಲಿನ
ಜನರಿಗೆ ತಮ್ಮ ಅಸಹ್ಯವಾದ ಆಚರಣೆಗಳ ಕುರಿತು ಹೇಳ
ಲಾಗುವಂತೆ ನಾನು ಇದನ್ನು ಮಾಡುತ್ತೇನೆ. ನಾನೇ
ಯೆಹೋವನೆಂದು ಆಗ ಅವರು ತಿಳಿದುಕೊಳ್ಳುವರು.’’

17ಆಗ ಯೆಹೋವನ ವಾಕ್ಯವು ನನಗೆ ಬಂದಿತು. ಆತನು
ಹೇಳಿದ್ದೇನೆಂದರೆ, 18‘‘ನರಪುತ್ರನೇ, ನೀನು ಭೀತಿಯಲ್ಲಿ
ರುವವನಂತೆ ನಟನೆ ಮಾಡಬೇಕು. ನೀನು ಆಹಾರ ತೆಗೆದು
ಕೊಳ್ಳುವಾಗ ನಡುಗಬೇಕು. ನೀರು ಕುಡಿಯುವಾಗ
ಭಯಪಡಬೇಕು ಮತ್ತು ಚಿಂತಿಸಬೇಕು. 19ಇದನ್ನು ನೀನು
ಸಾಮಾನ್ಯ ಜನರಿಗೆ ತಿಳಿಸಬೇಕು. ನೀನು ಹೀಗೆ
ಹೇಳಬೇಕು, ‘‘ಇನ್ನೂ ಇಸ್ರೇಲ್ ದೇಶದಲ್ಲಿರುವ ಜೆರುಸ
ಲೇಮಿನ ನಿವಾಸಿಗಳ ಬಗ್ಗೆ ನಮ್ಮ ಒಡೆಯನಾದ ಯೆಹೋ
ವನು ಇಂತೆನ್ನುತ್ತಾನೆ: ಅವರು ಊಟಮಾಡುವಾಗ
ಉದ್ವೇಗದಿಂದಿರುವರು; ಅವರು ಕುಡಿಯುವಾಗ ಭಯ
ದಿಂದಿರುವರು. ಯಾಕೆಂದರೆ ಅವರ ದೇಶದಲ್ಲಿರುವ
ಸಮಸ್ತವು ನಾಶವಾಗುತ್ತದೆ ಯಾಕೆಂದರೆ ಅಲ್ಲಿ ವಾಸಿಸುವ
ವರೆಲ್ಲರೂ ಹಿಂಸಕರಾಗಿದ್ದಾರೆ. 20ಜನರು ವಾಸವಾಗಿ
ರುವ ಪಟ್ಟಣಗಳು ನಾಶವಾಗುತ್ತವೆ; ಇಡೀ ದೇಶವೇ ನಾಶ
ವಾಗುತ್ತದೆ. ನಾನೇ ಯೆಹೋವನೆಂದು ಆಗ ನಿಮಗೆ
ತಿಳಿಯುವುದು.’’

21ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 22‘‘ನರಪುತ್ರನೇ,

‘ದಿನಗಳು ಉರುಳುತ್ತಿವೆ; ಎಲ್ಲಾ ದರ್ಶನಗಳು ನೆರ
ವೇರುವದಿಲ್ಲ’

ಎಂಬ ಈ ಗಾದೆಯನ್ನು ಇಸ್ರೇಲ್ ದೇಶದಲ್ಲಿರುವ
ನೀವೆಲ್ಲರೂ ಹೇಗೆ ಅರ್ಥಮಾಡಿಕೊಳ್ಳುವಿರಿ?

23‘‘ಆ ಜನರಿಗೆ ಹೀಗೆ ಹೇಳು: ಅವರ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ: ‘‘ನಾನು ಈ ಗಾದೆಗೆ
ಅಂತ್ಯವನ್ನು ಬರಮಾಡುವೆನು. ಇಸ್ರೇಲಿನಲ್ಲಿ ಆ
ಗಾದೆಯನ್ನು ಅವರು ಇನ್ನೆಂದಿಗೂ ಬಳಸುವುದಿಲ್ಲ. ಅದರ
ಬದಲಾಗಿ ಅವರಿಗೆ ಹೀಗೆ ಹೇಳು:

ದಿನಗಳು ಸಮೀಪಿಸಿವೆ; ಪ್ರತಿಯೊಂದು ದರ್ಶನವೂ
ನೆರವೇರುವುದು.

24‘‘ಇಸ್ರೇಲಿನಲ್ಲಿ ಇನ್ನು ಮೇಲೆ ಸುಳ್ಳುದರ್ಶನಗ
ಳಿರುವುದಿಲ್ಲ; ಮುಖಸ್ತುತಿಯ ಕಣಿಯೂ ಇರುವುದಿಲ್ಲ.
25ಯಾಕೆಂದರೆ ನಾನೇ ಯೆಹೋವನು. ನನಗೆ ಇಷ್ಟ
ಬಂದದ್ದನ್ನು ನಾನು ಹೇಳುವೆನು ಮತ್ತು ಆ ಸಂಗತಿಯು
ನೆರವೇರುವದು. ಅದಕ್ಕೆ ಹೆಚ್ಚು ಸಮಯ ಬೇಕಾಗದು.
ಆ ಸಂಕಟಗಳು ಬೇಗನೇ ಬರುವವು; ನಿಮ್ಮ ಜೀವಮಾನ
ಕಾಲದಲ್ಲಿಯೇ ಬರುವವು. ಓ ದಂಗೆಕೋರರಾದ
ಜನರೇ, ನಾನು ಒಂದು ವಿಷಯದಲ್ಲಿ ಏನಾದರೂ
ಹೇಳಿದರೆ ಆ ವಿಷಯವು ಸಂಭವಿಸುವಂತೆ ಮಾಡುವೆನು.’’
ನನ್ನ ಒಡೆಯನಾದ ಯೆಹೋವನು ಇದನ್ನು ಹೇಳಿದನು.

26ಆಗ ಯೆಹೋವನ ಸಂದೇಶವು ನನಗೆ ಬಂದಿತು.
ಆತನು ಹೇಳಿದ್ದೇನೆಂದರೆ,

27‘‘ನರಪುತ್ರನೇ, ನಿನಗೆ ನಾನು ಕೊಟ್ಟ ದರ್ಶನಗಳ
ಕುರಿತು ಬಹಳ ಕಾಲದ ನಂತರ ಅದು ನೆರವೇರುವದು
ಎಂದು ಇಸ್ರೇಲರ ಜನರು ನೆನೆಸುತ್ತಿದ್ದಾರೆ. 28ಆದುದ
ರಿಂದ ಅವರಿಗೆ ನೀನು ಈ ವಿಷಯವನ್ನು ತಿಳಿಸು, ‘‘ನನ್ನ
ಒಡೆಯನಾದ ಯೆಹೋವನು ಹೀಗೆ ಹೇಳುತ್ತಾನೆ:
ಏನೆಂದರೆ ನಾನು ಇನ್ನು ಹೆಚ್ಚು ತಡಮಾಡುವದಿಲ್ಲ.
ನಾನೊಂದು ವಿಷಯವು ನೆರವೇರುವುದು ಎಂದು
ಹೇಳಿದರೆ ಅದು ಖಂಡಿತ ನೆರವೇರುವುದು.’’ ಇವು ನನ್ನ
ಒಡೆಯನಾದ ಯೆಹೋವನ ನುಡಿಗಳು.

13 ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 2‘‘ನರಪುತ್ರನೇ, ನೀನು
ಇಸ್ರೇಲಿನ ಪ್ರವಾದಿಗಳಿಗೆ ನನ್ನ ಪರವಾಗಿ ಹೇಳಬೇಕು.
ಅವರು ನಿಜವಾಗಿ ನನ್ನ ಪರವಾಗಿ ಮಾತನಾಡುವದಿಲ್ಲ.
ಅವರು ಏನು ಹೇಳಬೇಕೆಂದು ಇಷ್ಟಪಡುತ್ತಾರೋ
ಅದನ್ನೇ ಹೇಳುತ್ತಾರೆ. ಅದಕ್ಕಾಗಿ ನೀನು ಅವರ ಕೂಡ
ಮಾತನಾಡಿ ಇಂತೆನ್ನಬೇಕು, ‘ಯೆಹೋವನ ಸಂದೇಶ
ವನ್ನು ಕೇಳಿರಿ. 3ನನ್ನ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ: ಬುದ್ಧಿಯಿಲ್ಲದ ಪ್ರವಾದಿಗಳೇ, ನಿಮಗೆ
ಸಂಕಟಗಳು ಬರುವವು. ನೀವು ನಿಮ್ಮ ಸ್ವಂತ ಆತ್ಮವನ್ನು
ಅನುಸರಿಸುತ್ತೀರಿ. ನೀವು ದರ್ಶನಗಳಲ್ಲಿ ಏನನ್ನೂ
ಕಂಡಿಲ್ಲ.

4‘‘‘ಇಸ್ರೇಲರೇ, ನಿಮ್ಮ ಪ್ರವಾದಿಗಳು ಪಾಳುಬಿದ್ದ
ಮನೆಗಳಲ್ಲಿ ಓಡಾಡುವ ನರಿಗಳಂತಿದ್ದಾರೆ. 5ಗೋಡೆಗಳು
ಬಿದ್ದುಹೋದ ಸ್ಥಳಗಳನ್ನು ನೀವು (ಪ್ರವಾದಿಗಳು)
ಕಾವಲು ಕಾಯುವದಿಲ್ಲ. ಇಸ್ರೇಲ್ ಜನರಿಗೋಸ್ಕರ
ನೀವು ಗೋಡೆಗಳನ್ನು ಕಟ್ಟುವುದಿಲ್ಲ. ಆದ್ದರಿಂದ
ಯೆಹೋವನಿಂದ ದಂಡನೆಯ ದಿನವು ಬಂದಾಗ ಜನರು
ಯುದ್ಧದಲ್ಲಿ ಸೋತು ಹೋಗುವರು.

6‘‘‘ಅವರನ್ನು ಯೆಹೋವನು ಕಳುಹಿಸಿಲ್ಲದಿದ್ದರೂ
ಅವರು, ‘ಯೆಹೋವನು ಇದನ್ನು ಹೇಳಿದ್ದಾನೆ’ ಎನ್ನು
ತ್ತಾರೆ. ಅವರು ಮಾಟಮಂತ್ರ ಮಾಡಿ ಇಂಥಿಂಥದು
ಸಂಭವಿಸುವುದು ಎಂದು ಸುಳ್ಳು ಹೇಳುತ್ತಾರೆ. ದೇವರು
ನಮ್ಮನ್ನು ಕಳುಹಿಸಿದ್ದು ಎಂದು ಸುಳ್ಳು ಹೇಳುವರು.
ಅವರು ತಮ್ಮ ಸುಳ್ಳು ನಿಜವಾಗುತ್ತಿರುವದನ್ನು ನೋಡಲು
ಕಾಯುತ್ತಿದ್ದಾರೆ.

7‘‘‘ಎಲೈ , ಸುಳ್ಳುಪ್ರವಾದಿಗಳೇ, ನೀವು ನೋಡಿದ
ದರ್ಶನಗಳು ಸತ್ಯವಾದವುಗಳಲ್ಲ. ನೀವು ಮಂತ್ರ ತಂತ್ರ
ಮಾಡಿ ಇಂತಿಂಥದು ಸಂಭವಿಸುವುದು ಎಂದು ಸುಳ್ಳು
ಹೇಳಿದ್ದೀರಿ. ನಾನು ಮಾತಾಡಿಲ್ಲದಿದ್ದರೂ ಯೆಹೋ
ವನೇ ಇದನ್ನು ಹೇಳಿದನೆಂದು ನೀವು ಹೇಳುತ್ತೀರಿ.’’’

8ಆದುದರಿಂದ ಈಗ ನನ್ನ ಒಡೆಯನಾದ ಯೆಹೋ
ವನು ನಿಜವಾಗಿಯೂ ಮಾತನಾಡುವನು. ಆತನು
ಹೇಳುವುದೇನೆಂದರೆ, ‘‘ನೀವು ಸುಳ್ಳು ಹೇಳಿದ್ದೀರಿ, ನೀವು
ಸುಳ್ಳು ದರ್ಶನಗಳನ್ನು ನೋಡಿದ್ದೀರಿ. ಆದ್ದರಿಂದ ನಾನು
ನಿಮಗೆ ವಿರುದ್ಧವಾಗಿದ್ದೇನೆ.’’ ಇದು ನನ್ನ ಒಡೆಯನಾದ
ಯೆಹೋವನು ಹೇಳಿದ್ದು. 9ಯೆಹೋವನು ಹೇಳುವದೇ
ನೆಂದರೆ, ‘‘ಯಾವ ಪ್ರವಾದಿಗಳು ಸುಳ್ಳುದರ್ಶನವನ್ನು
ನೋಡಿ ಸುಳ್ಳನ್ನು ಹೇಳಿದ್ದಾರೋ, ಅವರನ್ನು ಶಿಕ್ಷಿಸು
ವೆನು. ನನ್ನ ಜನರ ಮಧ್ಯೆಯಿಂದ ಅವರನ್ನು ತೆಗೆದು
ಬಿಡುವೆನು. ಅವರ ಹೆಸರುಗಳು ಇಸ್ರೇಲರ ವಂಶಾವಳಿ
ಪಟ್ಟಿಯಲ್ಲಿ ಇರುವದಿಲ್ಲ. ಅವರು ಇಸ್ರೇಲ್ ದೇಶಕ್ಕೆ
ಹಿಂದಿರುಗಿ ಬರುವದಿಲ್ಲ. ನಾನೇ ಒಡೆಯನಾದ
ಯೆಹೋವನೆಂದು ಆಗ ನಿಮಗೆ ಗೊತ್ತಾಗುವುದು.

10‘‘ಬಾರಿಬಾರಿಗೆ ಆ ಸುಳ್ಳು ಪ್ರವಾದಿಗಳು ನನ್ನ ಜನರಿಗೆ
ಸುಳ್ಳು ಹೇಳಿದರು. ಅವರು ಶಾಂತಿ ಇರುವದೆಂದು
ಹೇಳಿದರು. ಆದರೆ ಶಾಂತಿ ಇರಲಿಲ್ಲ. ಅದು ಈ ರೀತಿ
ಯಲ್ಲಿದೆ: ಜನರು ಬಲಹೀನವಾದ ಗೋಡೆಯನ್ನು
ಕಟ್ಟುತ್ತಾರೆ; ಅದು ಬಲವಾಗಿ ಕಾಣುವಂತೆ ಮಾಡಲು
ಪ್ರವಾದಿಗಳು ಅದಕ್ಕೆ ತೆಳುವಾದ ಮಡ್ಡಿ ಮಾಡುತ್ತಾರೆ.
11ಗೋಡೆಗೆ ಮಡ್ಡಿ ಮಾಡುವವರಿಗೆ ಹೀಗೆ ಹೇಳು: ನಾನು
ಆಲಿಕಲ್ಲು ಮತ್ತು ಬಲವಾದ ಮಳೆಯನ್ನು ಕಳುಹಿಸುವೆನು.
ಗಾಳಿಯು ಬಲವಾಗಿ ಬೀಸಿ ಸುಂಟರಗಾಳಿಯು ಬರು
ವದು. ಆಗ ಗೋಡೆಯು ಮುರಿದು ಬೀಳುವುದು.
12ಗೋಡೆಯು ಬಿದ್ದಾಗ ಜನರು ಪ್ರವಾದಿಗಳಾದ
ನಿಮ್ಮನ್ನು, ‘ನೀವು ಗೋಡೆಗೆ ಹಾಕಿದ ಗಾರೆ ಏನಾ
ಯಿತು?’’’ ಎಂದು ಪ್ರಶ್ನಿಸುವರು. 13ನನ್ನ ಒಡೆಯನಾದ
ಯೆಹೋವನು ಹೀಗೆ ಹೇಳುತ್ತಾನೆ, ‘‘ನಾನು ಸಿಟ್ಟು
ಗೊಂಡಿದ್ದೇನೆ. ಮತ್ತು ನಿಮಗೆ ವಿರುದ್ಧವಾಗಿ ಬಿರುಗಾಳಿ
ಯನ್ನು ಕಳುಹಿಸುತ್ತೇನೆ. ನಾನು ಕೋಪಗೊಂಡಿದ್ದೇನೆ,
ಆದುದರಿಂದ ಭಾರೀ ಮಳೆಯು ಬೀಳುವಂತೆ ಮಾಡು
ವೆನು. ನಾನು ಕೋಪಗೊಂಡಿದ್ದರಿಂದ ನಾಶಕರವಾದ
ಆಲಿಕಲ್ಲು ಆಕಾಶದಿಂದ ಬೀಳುವಂತೆ ಮಾಡುವೆನು.
14ನೀವು ಗೋಡೆಗೆ ಗಾರೆ ಹಾಕಿದಿರಿ. ಆದರೆ ನಾನು ಇಡೀ
ಗೋಡೆಯನ್ನೇ ನಾಶಮಾಡುವೆನು. ಅದನ್ನು ನೆಲಸಮ
ಮಾಡುವೆನು. ಆ ಗೋಡೆಯು ನಿಮ್ಮ ಮೇಲೆ ಬಿದ್ದು
ನಿಮ್ಮನ್ನು ಕೊಲ್ಲುವುದು. ಆಗ ನಾನು ಯೆಹೋವನೆಂದು
ಗೊತ್ತಾಗುವದು. 15ಗೋಡೆಗೆ ಗಾರೆ ಬಳಿಯುವವರ
ಮೇಲೂ, ಗೋಡೆಯ ಮೇಲೂ ನನ್ನ ಕೋಪವನ್ನು
ತೀರಿಸಿಕೊಳ್ಳುವೆನು. ಆಗ ನಾನು, ‘ಈಗ ಗೋಡೆ ಇಲ್ಲ.
ಅದಕ್ಕೆ ಗಾರೆ ಹಾಕುವವರೂ ಇಲ್ಲ’ಎಂದು ಹೇಳುವೆನು.

16‘‘ಇವೆಲ್ಲಾ ಇಸ್ರೇಲಿನ ಸುಳ್ಳು ಪ್ರವಾದಿಗಳಿಗಾಗು
ವದು. ಆ ಪ್ರವಾದಿಗಳು ಜೆರುಸಲೇಮಿನ ಬಗ್ಗೆ ಪ್ರವಾದಿ
ಸಿದರು ಮತ್ತು ಶಾಂತಿಯಿಲ್ಲದಿರುವಾಗಲೂ ಶಾಂತಿಯ
ದರ್ಶನಗಳನ್ನು ಕಂಡರು.’’ ನನ್ನ ಒಡೆಯನಾದ
ಯೆಹೋವನು ಇದನ್ನು ಹೇಳಿದನು.

17ದೇವರು ಹೀಗೆ ನುಡಿದನು: ‘‘ನರಪುತ್ರನೇ, ಇಸ್ರೇ
ಲಿನ ಪ್ರವಾದಿನಿಯರನ್ನು ನೋಡು. ಆ ಪ್ರವಾದಿನಿಯರು
ನನ್ನ ಪರವಾಗಿ ಮಾತಾಡುತ್ತಿಲ್ಲ. ಅವರು ತಮ್ಮ ಇಚ್ಛೆಯ
ಪ್ರಕಾರ ಮಾತನಾಡುತ್ತಾರೆ. ಆದುದರಿಂದ ನೀನು ನನ್ನ
ಪರವಾಗಿ ಅವರ ವಿರುದ್ಧವಾಗಿ ಮಾತನಾಡಬೇಕು.
ಅವರಿಗೆ ಈ ಮಾತುಗಳನ್ನು ಹೇಳಬೇಕು. 18ನನ್ನ ಒಡೆಯ
ನಾದ ಯೆಹೋವನು ಹೇಳುವದೇನೆಂದರೆ; ಪ್ರವಾದಿನಿ
ಯರೇ, ನಿಮಗೆ ಕೇಡಾಗುವುದು. ಜನರು ತಮ್ಮ ತೋಳು
ಗಳಲ್ಲಿ ಕಟ್ಟಿಕೊಳ್ಳುವದಕ್ಕಾಗಿ ನೀವು ತಾಯಿತಿಗಳನ್ನು
ಹೊಲಿದಿರಿ. ಜನರು ತಮ್ಮ ತಲೆಯ ಮೇಲೆ ಹಾಕಿಕೊಳ್ಳಲು
ಮಂತ್ರದ ವಿವಿಧ ಅಳತೆಯ ಮುಸುಕುಗಳನ್ನು ನೀವು
ತಯಾರಿಸುತ್ತೀರಿ. ನನ್ನ ಜನರ ಪ್ರಾಣಗಳನ್ನು ಭೇಟೆ
ಯಾಡುವದಕ್ಕೂ ನಿಮ್ಮ ಪ್ರಾಣಗಳನ್ನು ಉಳಿಸಿ
ಕೊಳ್ಳುವುದಕ್ಕೂ ನೀವು ಇದನ್ನು ಮಾಡುತ್ತೀರಿ.
19ಜನರೆದುರಿನಲ್ಲಿ ನನಗೆ ನೀವು ಮಹತ್ವವನ್ನು ಕೊಡುವ
ದಿಲ್ಲ. ಸ್ವಲ್ಪ ಬಾರ್ಲಿಗಾಗಿಯೂ ಕೆಲವು ತುಂಡು ರೊಟ್ಟಿ
ಗಾಗಿಯೂ ನೀವು ನನಗೆ ವಿರುದ್ಧವಾಗಿ ವರ್ತಿಸುತ್ತೀರಿ.
ನನ್ನ ಜನರಿಗೆ ನೀವು ಸುಳ್ಳನ್ನು ಆಡುತ್ತೀರಿ. ಅವರಿಗೆ
ಸುಳ್ಳೆಂದರೆ ಬಲು ಪ್ರೀತಿ. ನೀವು ಸಾಯಕೂಡದ ಜನರನ್ನು
ಸಾವಿಗೀಡು ಮಾಡುತ್ತೀರಿ. ಬದುಕಕೂಡದ ಜನರನ್ನು
ಜೀವಂತವಾಗಿಡುತ್ತೀರಿ. 20ಆದುದರಿಂದ ಒಡೆಯನಾದ
ಯೆಹೋವನು ಹೇಳುವದೇನೆಂದರೆ, ನೀವು ಆ ಬಟ್ಟೆಯ
ತೋಳುಪಟ್ಟಿಯನ್ನು ಜನರು ಬೋನಿನಲ್ಲಿ ಸಿಲುಕಿ
ಕೊಳ್ಳುವಂತೆ ಮಾಡುತ್ತೀರಿ. ಆದರೆ ನಾನು ಅವರನ್ನು
ಸ್ವತಂತ್ರರಾಗುವಂತೆ ಮಾಡುವೆನು. ನಿಮ್ಮ ತೋಳಿನಿಂದ
ಆ ಪಟ್ಟಿಯನ್ನು ಹರಿದುಹಾಕುವೆನು. ಆಗ ಜನರು ನಿಮ್ಮ
ಬಂಧನದಿಂದ ವಿಮುಕ್ತರಾಗುವರು. ಬೋನಿನಲ್ಲಿ ಸಿಕ್ಕಿ
ಕೊಂಡ ಪಕ್ಷಿಯು ಬಿಡಿಸಿದ ಕೂಡಲೇ ಹಾರಾಡುವಂತೆ
ಅವರೂ ಹಾರಾಡುವರು.

21ನಾನು ನಿಮ್ಮ ಮುಸುಕುಗಳನ್ನು ಹರಿದು ಹಾಕುವೆನು.
ಮತ್ತು ನಿಮ್ಮ ಹಿಡಿತದಿಂದ ಅವರನ್ನು ಬಿಡಿಸುವೆನು. ಆ
ಜನರು ನಿಮ್ಮ ಉರುಲಿನಿಂದ ತಪ್ಪಿಸಿಕೊಳ್ಳುವರು. ಆಗ
ನಾನೇ ಒಡೆಯನಾದ ಯೆಹೋವನು ಎಂದು
ಗೊತ್ತಾಗುವದು.

22‘‘‘ಪ್ರವಾದಿನಿಯರೇ, ನೀವು ಸುಳ್ಳುಗಾರ್ತಿಯರಾಗಿ
ದ್ದೀರಿ. ನಿಮ್ಮ ಸುಳ್ಳುಗಳು ಒಳ್ಳೆಯವರಿಗೆ ದುಃಖವ
ನ್ನುಂಟುಮಾಡುವವು. ಒಳ್ಳೆಯ ವ್ಯಕ್ತಿಗಳಿಗೆ ನೋವ
ನ್ನುಂಟುಮಾಡಲು ನನಗೆ ಮನಸ್ಸಿಲ್ಲ. ದುಷ್ಟ ಜನರು ತಮ್ಮ
ದುಷ್ಟಮಾರ್ಗಗಳನ್ನು ತೊರೆದು ಬಿಡದಂತೆಯೂ ತಮ್ಮ
ಪ್ರಾಣಗಳನ್ನು ರಕ್ಷಿಸಿಕೊಳ್ಳದಂತೆಯೂ ನೀವು ಪ್ರೋತ್ಸಾ
ಹಿಸುತ್ತೀರಿ. 23ಆದುದರಿಂದ ನೀವು ಪ್ರಯೋಜನವಿಲ್ಲದ
ದರ್ಶನವನ್ನು ಇನ್ನು ಮೇಲೆ ನೋಡುವದಿಲ್ಲ. ನಿಮ್ಮ
ಮಂತ್ರ ತಂತ್ರಗಳನ್ನು ಇನ್ನು ಮಾಡುವದಿಲ್ಲ. ನನ್ನ ಶಕ್ತಿ
ಯಿಂದ ನಾನು ನನ್ನ ಜನರನ್ನು ಕಾಪಾಡುತ್ತೇನೆ. ಆಗ
ನಾನು ಯೆಹೋವನು ಎಂದು ನೀವು ತಿಳಿಯುವಿರಿ.’’’

14 ಇಸ್ರೇಲರ ಹಿರಿಯರಲ್ಲಿ ಕೆಲವರು ನನ್ನ ಬಳಿಗೆ ಬಂದು
ನನ್ನೊಂದಿಗೆ ಮಾತನಾಡಲು ಕೂತುಕೊಂಡರು.
2ಆಗ ಯೆಹೋವನ ವಾಕ್ಯವು ನನಗೆ ಬಂತು.
ಆತನು ನನಗೆ ಹೇಳಿದ್ದೇನೆಂದರೆ, 3‘‘ನರಪುತ್ರನೇ, ಈ
ಜನರು ತಮ್ಮ ವಿಗ್ರಹಗಳಿಗೆ ಪ್ರತಿಷ್ಠಿತರಾಗಿದ್ದಾರೆ ಮತ್ತು
ಪಾಪಕ್ಕೆ ಬೀಳಲು ತಮಗೆ ತಾವೇ ಅವಕಾಶ ಮಾಡಿ
ಕೊಡುತ್ತಾರೆ. ಸಹಾಯಕ್ಕಾಗಿ ನನ್ನನ್ನು ಕೇಳಿಕೊಳ್ಳಲು
ಅವರಿಗೆ ಅವಕಾಶಕೊಡಬೇಕೇ? ಇಲ್ಲ. 4ಆದರೆ ನಾನು
ಅವರಿಗೆ ಉತ್ತರಕೊಡುವೆನು. ಅವರಿಗೆ ನೀನು ಹೀಗೆ ಹೇಳ
ಬೇಕು: ‘ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ: ಇಸ್ರೇಲರಲ್ಲಿ ಯಾರಾದರೂ ಪ್ರವಾದಿಯ ಬಳಿಗೆ
ಬಂದು ನನ್ನ ಸಲಹೆಯನ್ನು ಕೇಳಿದರೆ, ನಾನೇ ಆ
ಮನುಷ್ಯನಿಗೆ ಉತ್ತರ ಕೊಡುವೆನು. ಅವನ ಬಳಿಯಲ್ಲಿ
ಹೊಲಸು ವಿಗ್ರಹಗಳಿದ್ದರೂ, ಅವನನ್ನು ಪಾಪದಲ್ಲಿ
ಬೀಳುವಂತೆ ಮಾಡಿದ ವಸ್ತುಗಳನ್ನು ಅವನು ಇಟ್ಟು
ಕೊಂಡಿದ್ದರೂ, ಅವನು ಆ ವಿಗ್ರಹಗಳನ್ನು ಇನ್ನೂ ಪೂಜಿ
ಮಾಡುತ್ತಿದ್ದರೂ ನಾನು ಅವನೊಂದಿಗೆ ಮಾತನಾಡು
ವೆನು. ಅವನ ವಿಗ್ರಹಾರಾಧನೆಗೆ ತಕ್ಕ ಉತ್ತರವನ್ನೇ ಕೊಡು
ವೆನು. 5ಯಾಕೆಂದರೆ ನಾನು ಅವರ ಹೃದಯಗಳನ್ನು ಪರಿ
ವರ್ತಿಸಬೇಕು. ಅವರು ನನ್ನನ್ನು ತೊರೆದು ಹೊಲಸು
ವಿಗ್ರಹಗಳನ್ನು ಪೂಜಿಸಿದರೂ ನಾನು ಅವರನ್ನು ಪ್ರೀತಿಸು
ತ್ತೇನೆ ಎಂಬುದನ್ನು ಅವರು ತಿಳಿದುಕೊಳ್ಳಬೇಕು. ಇದೇ
ನನ್ನ ಉದ್ದೇಶ’

6‘‘ಆದುದರಿಂದ ಇಸ್ರೇಲ್ ಜನರಿಗೆ ಈ ವಿಷಯವನ್ನು
ತಿಳಿಸು. ಅವರಿಗೆ ಹೀಗೆ ಹೇಳು: ‘ನನ್ನ ಒಡೆಯನಾದ
ಯೆಹೋವನು ಹೇಳುವದೇನೆಂದರೆ, ನಿಮ್ಮ ಹೊಲಸು
ವಿಗ್ರಹಗಳನ್ನು ತೊರೆದು ಬಿಟ್ಟು ನನ್ನ ಬಳಿಗೆ ಹಿಂತಿರುಗಿರಿ.
ಆ ಭಯಂಕರ ಸುಳ್ಳು ದೇವರಿಂದ ತೊಲಗಿರಿ.
7ಯೆಹೋವನಾದ ನಾನೇ ಸ್ವತಃ ಪ್ರತಿಯೊಬ್ಬನಿಗೂ
ಉತ್ತರಿಸುವೆನು ಅಂದರೆ ಅವನು ತನ್ನನ್ನು ಪಾಪಕ್ಕೆ
ಬೀಳಿಸುವ ವಿಗ್ರಹಗಳನ್ನು ಹೊಂದಿದ್ದರೂ ಆ ವಿಗ್ರಹ
ಗಳನ್ನು ಪೂಜಿಸುತ್ತಿದ್ದರೂ ಮತ್ತು ನನ್ನಿಂದ ತನ್ನನ್ನು
ಬೇರ್ಪಡಿಸಿಕೊಳ್ಳುತ್ತಿದ್ದರೂ ನನ್ನ ಉಪದೇಶಕ್ಕಾಗಿ ನನ್ನ
ಬಳಿಗೆ ಬಂದರೆ ಅವನು ಇಸ್ರೇಲನಾಗಿದ್ದರೂ ಇಸ್ರೇಲಿನಲ್ಲಿ
ವಾಸವಾಗಿರುವ ಪರದೇಶಿಯಾಗಿದ್ದರೂ ನಾನು ಶಾಪ
ವೆಂಬ ಉತ್ತರ ಕೊಡುವೆನು. 8ನಾನು ಅವನ ವಿರುದ್ಧವಾಗಿ
ತಿರುಗಿ ಅವನನ್ನು ನಾಶಮಾಡುವೆನು. ಅವನು ಇಸ್ರೇಲ
ರಿಗೆ ನಿದರ್ಶನವಾಗಿರಬೇಕು, ಜನರು ಅವನನ್ನು ನೋಡಿ
ನಗಾಡುವರು. ನಾನು ಅವನನ್ನು ನನ್ನ ಜನರ ಮಧ್ಯದಿಂದ
ತೆಗೆದು ಬಿಡುವೆನು. ಆಗ ನೀವು ನಾನೇ ಯೆಹೋವ
ನೆಂದು ತಿಳಿಯುವಿರಿ. 9ಆದರೆ ಒಬ್ಬ ಪ್ರವಾದಿಯು
ಅವನಿಗೆ ತನ್ನದೇ ಅದ ಉತ್ತರವನ್ನು ಕೊಡುವಷ್ಟು
ಮೂರ್ಖನಾಗಿದ್ದರೆ, ಆಗ ನಾನು, ಅವನು ಎಂಥಾ
ಮೂರ್ಖನಾಗಿದ್ದಾನೆಂದು ತೋರಿಸುವೆನು. ಅವನ
ಮೇಲೆ ನನ್ನ ಸಾಮರ್ಥ್ಯವನ್ನು ಪ್ರಯೋಗಿಸುವೆನು. ಅವ
ನನ್ನು ನಾಶಮಾಡಿ ನನ್ನ ಜನರ ಮಧ್ಯದಿಂದ ಅವನನ್ನು
ತೆಗೆದು ಬಿಡುವೆನು. 10ಹೀಗೆ, ಸಲಹೆ ಕೇಳಲು ಬಂದ
ಮನುಷ್ಯನೂ ಅವನಿಗೆ ಉತ್ತರ ಕೊಟ್ಟ ಪ್ರವಾದಿಯೂ
ಒಂದೇ ಶಿಕ್ಷೆಯನ್ನು ಹೊಂದುವರು. 11ಆಗ ಇಸ್ರೇಲಿನ
ಜನರು ಇನ್ನೆಂದಿಗೂ ನನ್ನ ನಾಯಕತ್ವವನ್ನು ತೊರೆದು ಅಲೆ
ದಾಡುವದಿಲ್ಲ. ಹೀಗೆ, ಅವರು ತಮ್ಮ ದಂಗೆಕೋರತನದ
ಮಾರ್ಗಗಳಿಂದ ಇನ್ನೆಂದಿಗೂ ತಮ್ಮನ್ನು ಅಪವಿತ್ರರನ್ನಾಗಿ
ಮಾಡಿಕೊಳ್ಳುವದಿಲ್ಲ. ಆಗ ಅವರು ನಿಜವಾಗಿಯೂ ನನ್ನ
ಜನರಾಗಿರುವರು ಮತ್ತು ನಾನು ಅವರ ದೇವರಾಗಿರು
ವೆನು.’’’ ನನ್ನ ಒಡೆಯನಾದ ಯೆಹೋವನು ಇದನ್ನು
ಹೇಳಿದ್ದಾನೆ.

12ಆಗ ಯೆಹೋವನ ನುಡಿ ನನಗೆ ಬಂತು. ಆತನು ಹೀಗೆ
ಹೇಳಿದನು, 13‘‘ನರಪುತ್ರನೇ, ನನಗೆ ಅಪನಂಬಿಗಸ್ತ
ರಾಗಿದ್ದು ನನ್ನ ವಿರುದ್ಧ ಪಾಪಮಾಡುವ ಯಾವ ದೇಶವ
ನ್ನಾದರೂ ನಾನು ದಂಡಿಸುತ್ತೇನೆ. ನಾನು ಅವರ ಆಹಾರ
ಸರಬರಾಜನ್ನು ನಿಲ್ಲಿಸುತ್ತೇನೆ. ನಾನು ಕ್ಷಾಮವನ್ನು ಕಳು
ಹಿಸಿ ಅವರ ಜನರನ್ನೂ ಪ್ರಾಣಿಗಳನ್ನೂ ನಾಶ ಮಾಡುವೆ.
14ಆ ದೇಶದಲ್ಲಿ ನೋಹ, ದಾನಿಯೇಲ, ಯೋಬ ಜೀವಿಸಿ
ದ್ದರೂ ಆ ಮೂವರು ತಮ್ಮ ಸತ್ಕಾರ್ಯಗಳಿಂದ ತಮ್ಮ
ಪ್ರಾಣಗಳನ್ನು ಉಳಿಸಿಕೊಳ್ಳುತ್ತಿದ್ದರೇ ಹೊರತು ಇಡೀ
ದೇಶವನ್ನು ರಕ್ಷಿಸಲಾಗುತ್ತಿರಲಿಲ್ಲ.’’ ಇವುಗಳನ್ನು ನನ್ನ
ಒಡೆಯನಾದ ಯೆಹೋವನೇ ಹೇಳಿದ್ದಾನೆ.

15ದೇವರು ಹೇಳಿದ್ದೇನೆಂದರೆ: ‘‘ಒಂದು ವೇಳೆ, ನಾನು
ಕ್ರೂರಪ್ರಾಣಿಗಳನ್ನು ದೇಶದೊಳಗೆ ಕಳುಹಿಸಿ ಜನರನ್ನು
ಕೊಂದರೆ, ಅವುಗಳ ದೆಸೆಯಿಂದ ಯಾವನೂ ದೇಶದಲ್ಲಿ
ಪ್ರಯಾಣಮಾಡಲಾಗುತ್ತಿರಲಿಲ್ಲ. 16ನನ್ನ ಜೀವದಾಣೆ,
ನೋಹನಾಗಲೀ ದಾನಿಯೇಲನಾಗಲೀ ಯೋಬನಾ
ಗಲೀ ತಮ್ಮ ಪುತ್ರಪುತ್ರಿಯರನ್ನು ರಕ್ಷಿಸಲಾಗುತ್ತಿರಲಿಲ್ಲ.

ಅವರು ತಮ್ಮನ್ನು ಮಾತ್ರ ರಕ್ಷಿಸಿಕೊಳ್ಳಬಹುದಾಗಿತ್ತು.
ಆದರೆ ದೇಶವು ನಿರ್ಜನವಾಗುತ್ತಿತ್ತು.'' ಇವುಗಳನ್ನು ನನ್ನ
ಒಡೆಯನಾದ ಯೆಹೋವನೇ ಹೇಳಿದ್ದಾನೆ.

17ದೇವರು ಹೇಳಿದ್ದೇನೆಂದರೆ, ''ಒಂದು ವೇಳೆ, ಅವರ
ವಿರುದ್ಧ ಹೋರಾಡಲು ನಾನು ಶತ್ರುಸೈನ್ಯವೊಂದನ್ನು
ಕಳುಹಿಸಿದರೆ, ಎಲ್ಲಾ ಜನರು ಮತ್ತು ಎಲ್ಲಾ ಪ್ರಾಣಿಗಳು
ನಾಶವಾಗುತ್ತಿದ್ದವು. 18ದೇವರಾದ ಯೆಹೋವನಾಣೆ,
ನೋಹನಾಗಲೀ, ದಾನಿಯೇಲನಾಗಲೀ, ಯೋಬ
ನಾಗಲೀ ತಮ್ಮ ಪುತ್ರಪುತ್ರಿಯರನ್ನು ರಕ್ಷಿಸಿಕೊಳ್ಳಲಾಗುತ್ತಿ
ರಲಿಲ್ಲ. ಅವರು ತಮ್ಮನ್ನು ಮಾತ್ರ ರಕ್ಷಿಸಿಕೊಳ್ಳ
ಬಹುದಾಗಿತ್ತು.'' ಇವುಗಳನ್ನು ನನ್ನ ಒಡೆಯನಾದ
ಯೆಹೋವನೇ ಹೇಳಿದ್ದಾನೆ.

19ದೇವರು ಹೇಳಿದ್ದೇನೆಂದರೆ, ''ಒಂದು ವೇಳೆ, ನಾನು
ದೇಶದ ಮೇಲೆ ರೋಗಗಳನ್ನು ಬರಮಾಡಿದರೆ, ಅಥವಾ
ನನ್ನ ಕೋಪವನ್ನು ಸುರಿದು ಜನರನ್ನು ಕೊಂದುಹಾಕಿದರೆ
ಮತ್ತು ಪ್ರಾಣಿಗಳನ್ನು ನಾಶಮಾಡಿದರೆ, 20ದೇವರಾದ
ಯೆಹೋವನಾಣೆ, ನೋಹನಾಗಲೀ, ದಾನಿಯೇಲ
ನಾಗಲೀ, ಯೋಬನಾಗಲೀ ತಮ್ಮ ಪುತ್ರಪುತ್ರಿಯರನ್ನು
ರಕ್ಷಿಸಿಕೊಳ್ಳಲಾಗುತ್ತಿರಲಿಲ್ಲ. ಅವರು ತಮ್ಮನ್ನು ಮಾತ್ರ
ರಕ್ಷಿಸಿಕೊಳ್ಳಬಹುದಾಗಿತ್ತು.'' ಇದು ನನ್ನ ಒಡೆಯನಾದ
ಯೆಹೋವನ ನುಡಿ.

21ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ಭಯಂಕರವಾದ ನಾಲ್ಕು ದಂಡನೆಗಳನ್ನು ನಾನು
ಜೆರುಸಲೇಮ್ ಪಟ್ಟಣದ ಮೇಲೆ ಕಳುಹಿಸುವೆನು. ಆದ್ದ
ರಿಂದ ಜೆರುಸಲೇಮಿಗೆ ಇನ್ನೂ ಎಷ್ಟು ಹೆಚ್ಚಾಗಿ ಕಷ್ಟಕರ
ವಾಗಬಹುದೆಂದು ಯೋಚಿಸಿರಿ. ನಾನು ಆ ನಗರದ
ವಿರುದ್ಧವಾಗಿ ಶತ್ರು ಸೈನಿಕರನ್ನು, ಹಸಿವೆ, ರೋಗ ಮತ್ತು
ಕ್ರೂರ ಜಂತುಗಳನ್ನು ಕಳುಹಿಸುತ್ತೇನೆ. ದೇಶದಲ್ಲಿರುವ
ಎಲ್ಲಾ ಜನರನ್ನೂ ಪಶುಗಳನ್ನೂ ನಿರ್ಮೂಲ ಮಾಡು
ವೆನು. 22ಆದರೆ ಆಶ್ಚರ್ಯಕರವಾಗಿ, ಕೆಲವರು ಅದರಲ್ಲಿ
ಉಳಿದುಕೊಳ್ಳುವರು, ಪುತ್ರಪುತ್ರಿಯರನ್ನು ನಿಮ್ಮ ಬಳಿಗೆ
ಜೀವಂತವಾಗಿ ತರಲಾಗುವುದು. ಆ ಜನರು ಎಷ್ಟು ದುಷ್ಟ
ರೆಂಬುದನ್ನು ಸ್ವತಃ ನೀವೇ ಅರ್ಥಮಾಡಿಕೊಳ್ಳುವಿರಿ.
ಮತ್ತು ನಾನು ಜೆರುಸಲೇಮಿನ ಮೇಲೆ ಬರಮಾಡಿದ
ಇಡೀ ಆಪತ್ತಿನ ಬಗ್ಗೆ ನೀವು ಬಹಳವಾಗಿ ನೊಂದ ಕೊಳ್ಳು
ವಿರಿ. 23ಅವರು ಜೀವಿಸುವ ರೀತಿ, ದುಷ್ಟತನವನ್ನು ನಡಿ
ಸುವ ರೀತಿಯನ್ನು ನೀವು ನೋಡುವಿರಿ. ಆಗ ನಾನು
ಯಾಕೆ ಅವರನ್ನು ಶಿಕ್ಷಿಸುತ್ತೇನೆಂದು ನಿಮಗೆ ಗೊತ್ತಾಗು
ವದು.'' ಇದು ನನ್ನ ಒಡೆಯನಾದ ಯೆಹೋವನ ನುಡಿ.

15 ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 2''ನರಪುತ್ರನೇ, ದ್ರಾಕ್ಷಾ
ಬಳ್ಳಿಯ ಕಟ್ಟಿಗೆಯಿಂದ ಏನಾಗುತ್ತದೆ? ಅದು ಕಾಡಿನಲ್ಲಿ
ರುವ ಮರಗಳಲ್ಲಿ ಒಂದರಂತೆ ಪರಿಗಣಿಸಲ್ಪಟ್ಟರೂ ಅದರ
ಉಪಯುಕ್ತತೆಯಲ್ಲಿ ವ್ಯತ್ಯಾಸವಿದೆ. 3ದ್ರಾಕ್ಷಾಬಳ್ಳಿಯ
ಕಟ್ಟಿಗೆಯಿಂದ ಏನನ್ನಾದರೂ ತಯಾರಿಸಬಹುದೋ?
ಇಲ್ಲ. ಅದನ್ನು ಗೂಟವನ್ನಾಗಿ ಮಾಡಿ ಅದರಲ್ಲಿ ಪಾತ್ರೆ
ಗಳನ್ನು ತೂಗುಹಾಕಬಹುದೋ? ಇಲ್ಲ. 4ಅದು ಕೇವಲ
ಬೆಂಕಿಯಲ್ಲಿ ಸುಡಲಿಕ್ಕೆ ಯೋಗ್ಯವಾಗಿದೆ. ಕೆಲವು ಎರಡು
ಕೊನೆಯಲ್ಲಿ ಉರಿಯುವವು; ಮಧ್ಯಭಾಗವು ಬೆಂಕಿ
ಯಿಂದ ಕಪ್ಪಾಗಾಗುವುದು. ಕಟ್ಟಿಗೆಯು ಸಂಪೂರ್ಣವಾಗಿ
ಸುಟ್ಟುಹೋಗುವುದಿಲ್ಲ. ಆ ಸುಟ್ಟ ಕಟ್ಟಿಗೆಯಿಂದ
ಏನನ್ನಾದರೂ ತಯಾರಿಸಬಹುದೋ? 5ಅದು ಸುಡುವ
ಮೊದಲು ಅದರಿಂದ ಏನನ್ನೂ ಮಾಡಲಿಕ್ಕೆ ಆಗದಿದ್ದರೆ,
ಅದು ಸುಟ್ಟ ನಂತರ ಏನೂ ಮಾಡಲಿಕ್ಕಾಗುವದಿಲ್ಲ.
6ದ್ರಾಕ್ಷಾಬಳ್ಳಿಯು ಕಾಡಿನ ಮರಗಳಲ್ಲಿ ಒಂದರಂತೆ
ಪರಿಗಣಿಸಲ್ಪಟ್ಟರೂ,ಬೆಂಕಿಗೆ ಬೇಕಾದ ಇಂಧನಕ್ಕಾಗಿ
ನಾನು ಅದರ ಕಟ್ಟಿಗೆಯನ್ನು ನೇಮಿಸಿದ್ದೇನೆ. ಇದೇ ಕೆಲಸ
ವನ್ನು ಜೆರುಸಲೇಮಿನ ನಿವಾಸಿಗಳಿಗೂ ನಾನು ನೇಮಿಸಿ
ದ್ದೇನೆ.'' ಇವುಗಳನ್ನು ನನ್ನ ಒಡೆಯನಾದ ಯೆಹೋವನು
ಹೇಳಿದ್ದಾನೆ. 7''ನಾನು ಅವರನ್ನು ದಂಡಿಸುವೆನು. ಅವರು
ಒಂದು ಬೆಂಕಿಯಿಂದ ತಪ್ಪಿಸಿಕೊಂಡರೂ ಮತ್ತೊಂದು
ಬೆಂಕಿಯಿಂದ ಸುಟ್ಟು ಹೋಗುವರು. ನಾನು ಅವರನ್ನು
ದಂಡಿಸಿದಾಗ, ನಾನೇ ಯೆಹೋವನೆಂದು ನೀನು ತಿಳಿದು
ಕೊಳ್ಳುವೆ. 8ಜನರು ನನ್ನನ್ನು ತೊರೆದು ಅನ್ಯ ದೇವರು
ಗಳನ್ನು ಆರಾಧಿಸಿದ್ದಕ್ಕಾಗಿ ನಾನು ಆ ದೇಶವನ್ನು ನಾಶ
ಮಾಡುವೆನು'' ಇವುಗಳನ್ನು ನನ್ನ ಒಡೆಯನಾದ
ಯೆಹೋವನು ಹೇಳಿದನು.

16 ಮತ್ತೆ ಯೆಹೋವನ ವಾಕ್ಯವು ನನಗೆ ಬಂತು.
ಆತನು ಹೇಳಿದ್ದೇನೆಂದರೆ, 2''ನರಪುತ್ರನೇ,
ಜೆರುಸಲೇಮ್ ಪಟ್ಟಣಕ್ಕೆ ಅದರ ಅಸಹ್ಯವಾದ ಆಚರಣೆ
ಗಳ ಬಗ್ಗೆ ಹೇಳು. ದುಷ್ಟತ್ವದ ಕುರಿತು ಅವರಿಗೆ ತಿಳಿಸು.
3ನೀನು ಏನು ಹೇಳಬೇಕೆಂದರೆ, 'ಜೆರುಸಲೇಮಿಗೆ ನನ್ನ
ದೇವರಾದ ಯೆಹೋವನು ಇಂತೆನ್ನುತ್ತಾನೆ: ನಿನ್ನ ಇತಿಹಾಸ
ವನ್ನು ನೋಡು. ನೀನು ಕಾನಾನ್‌ನಲ್ಲಿ ಜನಿಸಿರುತ್ತೀ. ನಿನ್ನ
ತಂದೆಯು ಅಮೋರಿಯನು, ತಾಯಿಯು ಹಿತ್ತಿಯಳು.
4ಜೆರುಸಲೇಮೇ, ನೀನು ಹುಟ್ಟಿದ ಆ ದಿವಸದಲ್ಲಿ ನಿನ್ನ
ಹೊಕ್ಕಳ ನಾಳವನ್ನು ಕೊಯ್ಯಲು ಯಾರೂ ಇದ್ದಿಲ್ಲ. ನಿನ್ನ
ಮೈಯನ್ನು ನೀರು ಹಾಕಿ ಯಾರೂ ತೊಳೆದು ಶುದ್ಧ
ಮಾಡಿಲ್ಲ. ನಿನ್ನನ್ನು ಯಾರೂ ಉಪ್ಪಿನಿಂದ ಉಜ್ಜಿಲ್ಲ.
ಯಾರೂ ನಿನಗೆ ಬಟ್ಟೆ ಸುತ್ತಲಿಲ್ಲ. 5ಇವುಗಳಲ್ಲಿ ಯಾವು
ದನ್ನೇ ಮಾಡಲು ನಿನಗೋಸ್ಕರ ಯಾರೂ ಸಾಕಷ್ಟು
ಮರುಕಪಡಲಿಲ್ಲ. ಜೆರುಸಲೇಮೇ, ನೀನು ಜನಿಸಿದ
ದಿನದಲ್ಲಿ ನಿನಗೆ ಜನ್ಮವಿತ್ತವರು ನಿನ್ನನ್ನು ಹೊರಗೆ ಬಯಲಿ
ನಲ್ಲಿ ಎಸೆದುಬಿಟ್ಟರು. ನೀನು ತಿರಸ್ಕರಿಸಲ್ಪಟ್ಟಿದ್ದೆ.

6‘‘‘ಆಗ ನಾನು (ದೇವರು) ಆ ಮಾರ್ಗವಾಗಿ ಹಾದು
ಹೋಗುವಾಗ ನೀನು ರಕ್ತಮಯವಾಗಿ ಹೊರಳಾಡುತ್ತಾ
ಬಿದ್ದಿದ್ದೆ. ಆಗ ನಾನು ‘‘ಜೀವಿಸು’’ ಅಂದೆನು. ಹೌದು,
ನೀನು ರಕ್ತದಲ್ಲಿ ಮುಳುಗಿದ್ದೀ. ಆಗ ನಾನು ‘‘ಜೀವಿಸು’’
ಅಂದೆನು. 7ನಾನು ಹೊಲದಲ್ಲಿ ಸಸಿಯು ಹೇಗೆ ಬೆಳೆಯು
ತ್ತದೋ ಹಾಗೆಯೇ ನೀನು ಬೆಳೆಯಲು ಸಹಾಯ ಮಾಡಿ
ದೆನು. ನೀನು ಬೆಳೆಯುತ್ತಾ ಯೌವನದ ಹೊಸ್ತಿಲಲ್ಲಿ
ಕಾಲಿಟ್ಟ ಹೆಂಗಸಿನಂತಾದೆ. ನಿನಗೆ ಮುಟ್ಟು ಪ್ರಾರಂಭ
ವಾಯಿತು. ನಿನ್ನ ಸ್ತನಗಳು ಬೆಳೆದವು. ಕೂದಲುಗಳು
ಬೆಳೆದವು. ಆದರೂ ನೀನು ಬಟ್ಟೆಯಿಲ್ಲದವಳಾಗಿ ಬೆತ್ತಲೆ
ಯಾಗಿದ್ದೆ. 8ನಾನು ಮತ್ತೆ ಹಾದುಹೋಗುವಾಗ ನಿನ್ನನ್ನು
ನೋಡಲಾಗಿ ನೀನು ಸಂಭೋಗಿಸಲು ತಯಾರಾಗಿದ್ದೀ.
ನಾನು ನನ್ನ ಹೊದಿಕೆಯನ್ನು ನಿನ್ನ ಮೇಲೆ ಹಾಕಿ ನಿನ್ನ
ಬೆತ್ತಲೆ ದೇಹವನ್ನು ಮುಚ್ಚಿದೆನು. ನಿನ್ನನ್ನು ವಿವಾಹ
ವಾಗಲು ಮಾತುಕೊಟ್ಟೆನು. ನಾನು ನಿನ್ನೊಡನೆ ಒಡಂ
ಬಡಿಕೆ ಮಾಡಿಕೊಂಡೆನು. ಆಗ ನೀನು ನನ್ನವಳಾದೆ.’’’
ಇದು ನನ್ನ ಒಡೆಯನಾದ ಯೆಹೋವನ ನುಡಿ. 9‘‘‘ನಾನು
ನಿನ್ನನ್ನು ನೀರಿನಲ್ಲಿ ತೊಳೆದನು. ನಿನ್ನ ರಕ್ತವನ್ನು ತೊಳೆ
ದನು. ನಿನ್ನ ಮೈಗೆ ಎಣ್ಣೆ ಹಚ್ಚಿ ಉಜ್ಜಿದೆನು. 10ನಿನಗೆ ಅಂದ
ವಾದ ಉಡುಪನ್ನು ಕೊಟ್ಟು ಕಾಲಿಗೆ ನಯವಾದ ಚರ್ಮದ
ಕೆರಗಳನ್ನು ಕೊಟ್ಟೆನು. ನಿನ್ನ ತಲೆಗೆ ನಾರುಮಡಿಯ ತಲೆ
ಕಟ್ಟನ್ನು ಕೊಟ್ಟೆನು ಮತ್ತು ನಿನಗೆ ರೇಷ್ಮೆಯ ಬಟ್ಟೆಯನ್ನು
ಹೊದಿಸಿದೆನು.

11ಆನಂತರ ನಿನಗೆ ಕೆಲವು ಆಭರಣಗಳನ್ನು ಕೊಟ್ಟೆನು.
ನಿನ್ನ ತೋಳುಗಳಿಗೆ ತೋಳುಕಟ್ಟುಗಳನ್ನು, ಕುತ್ತಿಗೆಗೆ ಹಾರ
ವನ್ನು ತೊಡಿಸಿದೆನು. 12ನಿನಗೆ ಮೂಗುತಿ, ಕಿವಿಗೆ ಕಿವಿ
ಯುಂಗುರಗಳನ್ನು ಮತ್ತು ಒಂದು ಅಂದವಾದ ಕಿರೀಟ
ವನ್ನು ಧರಿಸಲು ಕೊಟ್ಟೆನು. 13ನಿನ್ನ ಚಿನ್ನ, ಬೆಳ್ಳಿ ಆಭರಣ,
ನಾರುಮಡಿ, ರೇಷ್ಮೆ ಮತ್ತು ಕಸೂತಿ ಹಾಕಿದ ಬಟ್ಟೆಗಳಲ್ಲಿ
ನೀನು ಸುಂದರಳಾಗಿ ಕಾಣಿಸುತ್ತಿದ್ದೀ. ನೀನು ಉತ್ತಮ
ವಾದ ಆಹಾರವನ್ನು ಊಟಮಾಡಿದೆ: ಉತ್ತಮ ಗೋಧಿ
ಹಿಟ್ಟು, ಜೇನುತುಪ್ಪ ಮತ್ತು ಆಲೀವ್ ಎಣ್ಣೆ. ನೀನು
ಅತ್ಯಂತ ಸುಂದರಿಯಾಗಿರುವೆ. ಮತ್ತು ನೀನು ರಾಣಿ
ಯಾಗಿರುವೆ. 14ಹೌದು, ನೀನು ನಿನ್ನ ಸಂಪೂರ್ಣವಾದ
ಸೌಂದರ್ಯಕ್ಕಾಗಿ ಜನಾಂಗಗಳ ಮಧ್ಯದಲ್ಲಿ ಹೆಸರುವಾಸಿ
ಯಾಗಿರುವೆ. ಯಾಕೆಂದರೆ ನಾನು ನಿನ್ನನ್ನು ಅತ್ಯಂತ
ಸೌಂದರ್ಯವತಿಯನ್ನಾಗಿ ಮಾಡಿದೆನು.’’’ ಇವುಗಳನ್ನು
ನನ್ನ ಒಡೆಯನಾದ ಯೆಹೋವನು ಹೇಳಿದನು.

15ದೇವರು ಇಂತೆಂದನು: ‘‘ನೀನು ನಿನ್ನ ಸೌಂದ
ರ್ಯದ ಮೇಲೆ ಭರವಸೆ ಉಳ್ಳವಳಾಗಿದ್ದೀ. ನಿನ್ನ
ಪ್ರಖ್ಯಾತಿಯಿಂದಾಗಿ ನನಗೆ ಅಪನಂಬಿಗಸ್ತಳಾದಿ. ನಿನ್ನನ್ನು
ಹಾದು ಹೋಗುವ ಪ್ರತಿವ್ಯಕ್ತಿಯೊಂದಿಗೆ ನೀನು ವೇಶ್ಯೆ
ಯಂತೆ ನಡೆದುಕೊಂಡಿ. ನೀನು ನಿನ್ನನ್ನು ಅವರಿ
ಗೊಪ್ಪಿಸಿದ್ದೀ. 16ನೀನು ನಿನ್ನ ಬಟ್ಟೆಗಳಲ್ಲಿ ಕೆಲವನ್ನು ತೆಗೆದು
ಕೊಂಡು ನಿನ್ನ ಪೂಜಿಸುವ ಸ್ಥಳಗಳನ್ನು ವರ್ಣರಂಜಿತವ
ನ್ನಾಗಿ ಮಾಡಿದೆ ಮತ್ತು ಆ ಸ್ಥಳಗಳಲ್ಲಿ ನೀನು ಸೂಳೆಯಂತೆ
ವರ್ತಿಸಿದೆ. ಹಾದುಹೋಗವ ಪ್ರತಿಯೊಬ್ಬ ಗಂಡಸಿಗೂ
ನೀನು ನಿನ್ನನ್ನು ಒಪ್ಪಿಸಿಕೊಟ್ಟೆ. 17ನಾನು ನಿನಗೆ ಕೊಟ್ಟ
ಬೆಳ್ಳಿಬಂಗಾರಗಳ ಆಭರಣಗಳಿಂದ ನೀನು ಗಂಡು ವಿಗ್ರಹ
ಗಳನ್ನು ಮಾಡಿಕೊಂಡು ಅವುಗಳೊಂದಿಗೆ ಸೂಳೆಯಂತೆ
ವರ್ತಿಸಿದೆ. 18ನಂತರ ನೀನು ಅಂದವಾದ ಬಟ್ಟೆಯಿಂದ
ಆ ವಿಗ್ರಹಗಳಿಗೆ ಹೊದಿಸಿದೆ. ನಾನು ನಿನಗೆ ಕೊಟ್ಟಿದ್ದ
ಧೂಪ, ಪರಿಮಳ ದ್ರವ್ಯವನ್ನು ನೀನು ಆ ವಿಗ್ರಹಗಳ
ಮುಂದೆ ಹಾಕಿದಿ. 19ನಾನು ನಿನಗೆ ರೊಟ್ಟಿ, ಜೇನು ಮತ್ತು
ಎಣ್ಣೆ ಯನ್ನು ಕೊಟ್ಟಿದ್ದೆನು. ಆದರೆ ನೀನು ಆ ಆಹಾರವನ್ನು
ಮೂರ್ತಿಗಳಿಗೆ ಕೊಟ್ಟೆ. ಆ ಸುಳ್ಳುದೇವರುಗಳನ್ನು
ಮೆಚ್ಚಿಸುವದಕೋಸ್ಕರ ನೀನು ಅವುಗಳನ್ನು ಸುಗಂಧ
ವಾಸನೆಯ ಕಾಣಿಕೆಯಂತೆ ಅರ್ಪಿಸಿದೆ.’’ ನನ್ನ ಒಡೆಯ
ನಾದ ಯೆಹೋವನು ಈ ಸಂಗತಿಗಳನ್ನು ಹೇಳಿದನು.

20ದೇವರು ಹೇಳಿದ್ದೇನೆಂದರೆ, ‘‘ನನ್ನ ಮಕ್ಕಳಾಗಿದ್ದ
ನಿನ್ನ ಪುತ್ರಪುತ್ರಿಯರನ್ನು ನೀನು ತೆಗೆದುಕೊಂಡು ಅವ
ರನ್ನು ಆಹಾರವನ್ನಾಗಿ ವಿಗ್ರಹಗಳಿಗೆ ಯಜ್ಞ ಅರ್ಪಿಸಿದೆ.
ನಿನ್ನ ಸೂಳೆತನವು ಸಾಕಾಗಿರಲಿಲ್ಲವೇ? 21ನೀನು ನನ್ನ
ಗಂಡು ಮಕ್ಕಳನ್ನು ಸಂಹರಿಸಿ ಬೆಂಕಿಯಲ್ಲಿ ದಾಟಿಸಿ ಆ
ಸುಳ್ಳುದೇವರಿಗೆ ಕೊಟ್ಟೆ. 22ನಿನ್ನ ಅಸಹ್ಯಕೃತ್ಯಗಳನ್ನೂ ಸೂಳೆ
ಯಂತೆ ವರ್ತಿಸುತ್ತಿರುವುದನ್ನೂ ನಿನ್ನ ಎಳೆತನದ ಸಮಯ
ವನ್ನೂ ಮತ್ತು ನಿನ್ನ ಸ್ವಂತ ರಕ್ತದಲ್ಲಿ ಬೆತ್ತಲೆಯಾಗಿ
ಹೊರಳಾಡುತ್ತಿದ್ದುದನ್ನೂ ನೀನು ಮರೆತುಬಿಟ್ಟೆ.

23‘‘ಓ ಜೆರುಸಲೇಮೇ, ಎಂಥಾ ಭಯಂಕರ, ಅದು ನಿನ
ಗೆಂಥಾ ಭಯಂಕರವಾಗಿರುವುದು’’ ಎನ್ನುತ್ತಾನೆ ನನ್ನ
ಒಡೆಯನಾದ ಯೆಹೋವನು. 24‘‘ನೀನು ಎಲ್ಲಾ ದುಷ್ಟ
ಕಾರ್ಯಗಳನ್ನು ಮಾಡಿದ ನಂತರ ಸುಳ್ಳು ದೇವರುಗಳಿ
ಗಾಗಿ ಎತ್ತರವಾದ ಸ್ಥಳಗಳಲ್ಲಿ ನೀನು ಹೆಚ್ಚು
ಪೂಜಾಸ್ಥಳಗಳನ್ನು ಮಾಡಿದೆ. ಪ್ರತಿಯೊಂದು ರಸ್ತೆಯ
ಚೌಕಗಳಲ್ಲಿ ಅನ್ಯದೇವರುಗಳಿಗಾಗಿ ಪೂಜಾಸ್ಥಳಗಳನ್ನು
ಮಾಡಿದೆ.

25ಪ್ರತೀ ರಸ್ತೆಯ ಪ್ರಾರಂಭದಲ್ಲಿ ಅಂಥಾ ಪೂಜಾ
ಸ್ಥಳಗಳನ್ನು ನಿರ್ಮಿಸಿದ್ದೀ. ನೀನು ನಿನ್ನ ಸೌಂದರ್ಯವನ್ನು
ಹಾಳು ಮಾಡಿಕೊಂಡಿ. ನೀನು ಅಸಹ್ಯವಾದ ಕಾರ್ಯ
ಗಳನ್ನು ಮಾಡಲು ನಿನ್ನ ಸೌಂದರ್ಯವನ್ನು ಬಳಸಿಕೊಂಡೆ.
ಹಾದಿಯಲ್ಲಿ ಹೋಗುವ ಪ್ರತಿಯೊಬ್ಬ ಗಂಡಸಿಗೂ ನೀನು
ಲೈಂಗಿಕ ತೃಪ್ತಿ ನೀಡಿ ನಿನ್ನ ಸೂಳೆ ತನವನ್ನು ಹೆಚ್ಚಿಸಿಕೊಂಡೆ.
26ಬಳಿಕ ನಿನ್ನ ನೆರೆಯವರೂ ಅತೀ ಕಾಮುಕರೂ ಆಗಿದ್ದ
ಈಜಿಪ್ಟಿನವರ ಬಳಿಗೆ ನೀನು ಹೋದೆ. ನನ್ನನ್ನು

ಕೋಪಗೊಳಿಸುವದಕ್ಕಾಗಿ ನೀನು ಅವರೊಂದಿಗೆ ಹಲ
ವಾರು ಸಲ ಲೈಂಗಿಕ ಸಂಪರ್ಕ ಮಾಡಿದೆ. 27ಆಗ ನಾನು
ನಿನ್ನನ್ನು ಶಿಕ್ಷಿಸಿದೆನು. ನಾನು ನಿನಗೆ ಕೊಟ್ಟ ದೇಶದಿಂದ
ಸ್ವಲ್ಪ ಭಾಗವನ್ನು ಕಿತ್ತುಕೊಂಡೆನು. ನಿನ್ನ ಶತ್ರುಗಳಾದ
ಫಿಲಿಷ್ಟಿಯರ ಹೆಣ್ಣುಮಕ್ಕಳು ನಿನ್ನೊಂದಿಗೆ ತಮಗೆ ಇಷ್ಟ
ಬಂದಂತೆ ವರ್ತಿಸಲುಬಿಟ್ಟೆನು. ನಿನ್ನ ಕೆಟ್ಟ ಕಾರ್ಯಗಳನ್ನು
ನೋಡಿ ಅವರೂ ಅಚ್ಚರಿಗೊಂಡರು. 28ಆ ಬಳಿಕ ನೀನು
ಅಶ್ಶೂರದವರೊಂದಿಗೆ ಸಂಭೋಗಿಸಲು ಹೋದಿ.
ನೀನು ತೃಪ್ತಿಗೊಳ್ಳುವಷ್ಟು ಆನಂದ ಸಿಗಲಿಲ್ಲ. ನೀನು
ಎಂದೂ ತೃಪ್ತಿಗೊಂಡವಳಲ್ಲ. 29ಆದ್ದರಿಂದ ನೀನು
ವ್ಯಾಪಾರದ ದೇಶವಾದ ಬಾಬಿಲೋನಿನ ಕಡೆಗೆ ಮುಖ
ಮಾಡಿಕೊಂಡೆ. ಆದರೂ ನೀನು ತೃಪ್ತಿ ಪಡೆಯಲಿಲ್ಲ.
30ನಾಚಿಕೆಯಿಲ್ಲದೆ ಸೂಳೆಯಂತೆ ನೀನು ಮಾಡಿದ ಈ
ಎಲ್ಲಾ ಕಾರ್ಯಗಳಿಂದ ನಾನು ನಿನ್ನ ವಿರುದ್ಧ ಕೋಪ
ದಿಂದ ತುಂಬಿರುವೆ.'' ನನ್ನ ಒಡೆಯನಾದ ಯೆಹೋವನು
ಈ ಸಂಗತಿಗಳನ್ನು ಹೇಳಿದನು.

31ದೇವರು ಹೇಳಿದ್ದೇನೆಂದರೆ, ''ಆದರೆ ನೀನು
ವೇಶ್ಯೆಯ ಹಾಗೆ ಪೂರ್ಣವಾಗಿರಲಿಲ್ಲ. ನೀನು ಎತ್ತರದ
ಪೂಜಾಸ್ಥಳಗಳನ್ನು ಪ್ರತೀ ರಸ್ತೆಯ ಪ್ರಾರಂಭದಲ್ಲಿಯೂ
ರಸ್ತೆಯ ಮೂಲೆಗಳಲ್ಲಿಯೂ ಯಜ್ಞವೇದಿಕೆಗಳನ್ನು ಕಟ್ಟಿ
ಸಿರುವೆ. ಆ ಎಲ್ಲಾ ಪುರುಷರೊಂದಿಗೆ ನೀನು ಸಂಭೋಗಿ
ಸಿರುವೆ. ಆದರೆ ಸೂಳೆಯಂತೆ ಅವರಿಂದ ನೀನು ಹಣ
ಪಡಕೊಳ್ಳಲಿಲ್ಲ. 32ವ್ಯಭಿಚಾರಿಣಿಯೇ, ನೀನು ನಿನ್ನ ಸ್ವಂತ
ಗಂಡನಿಗಿಂತ ಪರಪುರುಷನನ್ನೇ ಹೆಚ್ಚಾಗಿ ಆಶಿಸುವವ
ಳಾಗಿರುವೆ. 33ವೇಶ್ಯೆಯರು ತಮ್ಮೊಡನೆ ಕೂಡುವದಕ್ಕಾಗಿ
ಪುರುಷರಿಂದ ಹಣ ವಸೂಲಿ ಮಾಡುವರು. ಆದರೆ ನಿನ್ನ
ಮಿಂಡರಿಗೆ ನೀನೇ ಹಣವನ್ನು ಕೊಟ್ಟಿರುವೆ. ನಿನ್ನೊಂದಿಗೆ
ಸಂಭೋಗ ಮಾಡಲು ನೀನೇ ಅವರಿಗೆ ಹಣವನ್ನು ಕೊಟ್ಟಿ
ರುವೆ. 34ನೀನು ಸೂಳೆಯರಿಗೇ ವಿರುದ್ಧವಾಗಿ ನಡೆದಿ
ರುವೆ. ಅವರು ಪುರುಷರಿಂದ ಹಣ ತೆಗೆದುಕೊಳ್ಳುವಾಗ
ನೀನೇ ಅವರಿಗೆ ಹಣ ಕೊಟ್ಟಿರುವೆ.''

35ಸೂಳೆಯೇ, ಯೆಹೋವನ ಸಂದೇಶವನ್ನು ಕೇಳು:
36ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ನಿನ್ನ ಅತಿಯಾದ ಶರೀರದಾಶೆಯಿಂದಾಗಿ, ನಿನ್ನ ಬೆತ್ತ
ಲೆಯ ದೇಹವನ್ನು ನೋಡಿ ನಿನ್ನೊಂದಿಗೆ ಲೈಂಗಿಕ
ಸಂಬಂಧವನ್ನು ಹೊಂದಲು ನೀನು ನಿನ್ನ ಪ್ರಿಯರಿಗೂ,
ನಿನ್ನ ಹೊಲಸು ದೇವರುಗಳಿಗೂ ಅವಕಾಶಮಾಡಿಕೊಟ್ಟೆ.
ನೀನು ನಿನ್ನ ಮಕ್ಕಳನ್ನು ಕೊಂದು ಅವರ ರಕ್ತವನ್ನು ಸುರಿಸಿ
ರುತ್ತೀ. ಇದು ಆ ಹೊಲಸು ದೇವರುಗಳಿಗೆ ನೀನು ಕೊಟ್ಟ
ದಾನ. 37ಈ ಕಾರಣದಿಂದ, ನೀನು ಸುಖ ಕೊಟ್ಟಿರುವ
ನಿನ್ನ ಎಲ್ಲಾ ಪ್ರಿಯರನ್ನು ಅಂದರೆ ಈಗಿನ ಪ್ರಿಯರನ್ನು
ಮತ್ತು ನೀನು ತಿರಸ್ಕರಿಸಿರುವ ಹಿಂದಿನ ಪ್ರಿಯರನ್ನೂ
ಒಟ್ಟಾಗಿ ಸೇರಿಸಿ, ನಿನ್ನ ಬೆತ್ತಲೆತನವನ್ನು ಅವರು
ನೋಡುವಂತೆ ಮಾಡುವೆನು. ಅವರು ನಿನ್ನನ್ನು ಪೂರ್ತಿ
ಯಾಗಿ ನೋಡುವರು. 38ಬಳಿಕ, ಕೊಲೆಗಾರ್ತಿಯರೂ
ವ್ಯಭಿಚಾರಿಣಿಯರೂ ಶಿಕ್ಷಿಸಲ್ಪಡುವಂತೆ ನಾನು ನಿನ್ನನ್ನು
ದಂಡಿಸುವೆನು. ನನ್ನ ಭಯಂಕರವಾದ ಕೋಪದಿಂದ
ನಿನಗೆ ಮರಣ ದಂಡನೆಯನ್ನು ವಿಧಿಸುವೆನು. 39ಆ ನಿನ್ನ
ಮಿಂಡಂದಿರಿಗೆ ನಿನ್ನನ್ನು ಬಿಟ್ಟುಕೊಡುವೆನು. ಅವರು ನಿನ್ನ
ದಿಬ್ಬಗಳನ್ನು ನಾಶಮಾಡುವರು ಮತ್ತು ಪೂಜಾಯಜ್ಞ
ವೇದಿಕೆಗಳನ್ನು ಕೆಡವಿ ಹಾಕುವರು. ನಿನ್ನ ಬಟ್ಟೆಗಳನ್ನು
ಕಿತ್ತುಕೊಳ್ಳುವರು ಮತ್ತು ಚಂದವಾದ ಆಭರಣಗಳನ್ನು
ತೆಗೆದುಕೊಂಡು ಹೋಗುವರು. ಮತ್ತು ನಿನ್ನನ್ನು ಬೆತ್ತಲೆ
ಯಾಗಿ ಮಾಡುವರು. 40ನಿನ್ನನ್ನು ಕಲುಗಳಿಂದ ಕೊಲ್ಲು
ವದಕ್ಕಾಗಿ ಅವರು ಜನರನ್ನು ಒಂದುಗೂಡಿಸುವರು.
ಬಳಿಕ ಅವರು ನಿನ್ನನ್ನು ಖಡ್ಗಗಳಿಂದ ತುಂಡುತುಂಡಾಗಿ
ಕತ್ತರಿಸುವರು. 41ಬಳಿಕ, ಅನೇಕ ಸ್ತ್ರೀಯರು ನೋಡ
ಲೆಂದು ನಿನ್ನ ಮನೆಗಳನ್ನು ಸುಟ್ಟು, ನಿನ್ನನ್ನು ದಂಡಿಸುವರು.
ನೀನು ಸೂಳೆಯಂತೆ ಜೀವಿಸುವದನ್ನು ನಾನು ನಿಲ್ಲಿಸು
ವೆನು. ನೀನು ನಿನ್ನ ಮಿಂಡಂದರಿಗೆ ಹಣ ಕೊಡುವದನ್ನು
ನಿಲ್ಲಿಸುತ್ತೇನೆ. 42ಬಳಿಕ ನಿನ್ನ ಮೇಲೆ ನನಗಿರುವ ಕೋಪ
ವನ್ನು ತೊಲಗಿಸುವೆನು; ನಾನು ಶಾಂತನಾಗುವೆನು; ಆ
ಬಳಿಕ ನಾನು ಸಿಟ್ಟುಗೊಳ್ಳುವುದೇ ಇಲ್ಲ. 43ಇವೆಲ್ಲಾ ಯಾಕೆ
ಸಂಭವಿಸಬೇಕು? ಯಾಕೆಂದರೆ ನೀನು ಎಳೆಯವ
ಳಾಗಿದ್ದಾಗ ಏನು ಸಂಭವಿಸಿತೆಂದು ಮರೆತು ಬಿಟ್ಟಿರುತ್ತೀ.
ನೀನು ಕೆಟ್ಟ ಕೆಲಸಗಳನ್ನು ಮಾಡಿ ನಾನು ಕೋಪಿಸಿ
ಕೊಳ್ಳುವಂತೆ ಮಾಡಿದ್ದೀ. ಆದುದರಿಂದ ಆ ಕೆಟ್ಟ ಕಾರ್ಯ
ಮಾಡಿದ್ದಕ್ಕಾಗಿ ನಿನ್ನನ್ನು ಶಿಕ್ಷಿಸಬೇಕಾಗಿ ಬಂತು. ನೀನು
ಅದಕ್ಕಿಂತಲೂ ಭಯಂಕರ ಕಾರ್ಯ ನಡಿಸಲು ಯೋಜನೆ
ಹಾಕಿಕೊಂಡಿದ್ದೀ.'' ಇವು ನನ್ನ ಒಡೆಯನಾದ
ಯೆಹೋವನ ನುಡಿಗಳು.

44''ಜ್ಞಾನೋಕ್ತಿಗಳನ್ನು ಉಲ್ಲೇಖಿಸಲು ಇಚ್ಛಿಸುವ ಪ್ರತಿ
ಯೊಬ್ಬನು ನಿನ್ನ ವಿರುದ್ಧವಾಗಿ ಇದನ್ನು ಉಲ್ಲೇಖಿಸುವನು:
'ತಾಯಿಯಂತೆ ಮಗಳು.' 45ನೀನು ನಿನ್ನ ತಾಯಿಯ
ಮಗಳು. ನೀನು ನಿನ್ನ ಗಂಡನನ್ನು ಮತ್ತು ಮಕ್ಕಳನ್ನು
ತಿರಸ್ಕರಿಸಿರುವೆ. ನೀನು ನಿನ್ನ ಸಹೋದರಿಯಂತಿರುವೆ.
ನೀವು ನಿಮ್ಮ ಗಂಡಂದಿರನ್ನೂ ಮಕ್ಕಳನ್ನೂ ತಿರಸ್ಕರಿಸಿದಿರಿ.
ನೀವು ನಿಮ್ಮನ್ನು ಹೆತ್ತವರ ತರಹ ಇದ್ದೀರಿ. ನಿಮ್ಮ ತಾಯಿ
ಹಿತ್ತಿಯಳಾಗಿದ್ದಳು. ನಿಮ್ಮ ತಂದೆಯು ಅಮೋರಿಯದವ
ನಾಗಿದ್ದನು.

46ನಿನ್ನ ಅಕ್ಕ ಸಮಾರ್ಯಳು. ಆಕೆಯು ನಿನ್ನ ಉತ್ತರ
ದಿಕ್ಕಿನಲ್ಲಿ ತನ್ನ ಹೆಣ್ಣು ಮಕ್ಕಳೊಂದಿಗೆ (ಪಟ್ಟಣಗಳು) ವಾಸ
ಮಾಡಿದ್ದಳು. ನಿನ್ನ ತಂಗಿಯು ಸೊದೋಮಳು. ಆಕೆ ನಿನ್ನ
ದಕ್ಷಿಣದಲ್ಲಿ ತನ್ನ ಹೆಣ್ಣುಮಕ್ಕಳೊಂದಿಗೆ (ಪಟ್ಟಣಗಳು)

ವಾಸಿಸಿದ್ದಳು. 47ಅವರಿಗಿಂತಲೂ ಹೆಚ್ಚು ಕೆಟ್ಟು ಹೋಗಲು
ನಿನಗೆ ಸ್ವಲ್ಪ ಸಮಯವೇ ಸಾಕಾಯಿತು. ಅವರಿಗಿಂತಲೂ
ಭಯಂಕರವಾದ ಕೆಲಸಗಳನ್ನೂ ನೀನು ಮಾಡಿರುವಿ.
48ದೇವರಾದ ಯೆಹೋವನು ಇಂತೆನ್ನುತ್ತಾನೆ, ನನ್ನ ಜೀವ
ದಾಣೆ, ನಿನ್ನ ತಂಗಿಯಾದ ಸೊದೋಮಳು ಮತ್ತು
ಆಕೆಯು ಹೆಣ್ಣಮಕ್ಕಳು ನೀನು ನಡಿಸಿದಷ್ಟು ದುಷ್ಟತ್ವವನ್ನು
ನಡಿಸಲಿಲ್ಲ.''

49ದೇವರು ಹೇಳಿದ್ದೇನೆಂದರೆ, ''ನಿನ್ನ ತಂಗಿ
ಸೊದೋಮ್ ಮತ್ತು ಆಕೆಯ ಹೆಣ್ಣುಮಕ್ಕಳು ಕೊಬ್ಬಿದ
ಕಣ್ಣುಳ್ಳವರಾಗಿದ್ದರು. ಅವರಿಗೆ ತಿನ್ನಲು ಬೇಕಾದಷ್ಟಿತ್ತು.
ಅವರು ಶಾಂತಿಕರವಾದ ಸುಭದ್ರತೆಯಲ್ಲಿ ಜೀವಿಸಿದರು.
ಅವರು ಬಡವರಿಗೆ ಸಹಾಯ ಮಾಡಲಿಲ್ಲ. 50ಸೊದೋ
ಮಿಗೂ ಮತ್ತು ಆಕೆಯ ಹೆಣ್ಣು ಮಕ್ಕಳಿಗೂ ಅತಿರೇಕ
ಜಂಭವು ಬಂದು ಭಯಂಕರ ಕೃತ್ಯಗಳನ್ನು ನನ್ನ
ಮುಂದೆಯೇ ಮಾಡಿದರು. ಆದ್ದರಿಂದ ನಾನು ಅವರನ್ನು
ನನ್ನಿಂದ ದೂರ ಮಾಡಿದೆನು.''

51ದೇವರು ಹೇಳಿದ್ದೇನೆಂದರೆ: ''ನೀನು ಮಾಡಿದ
ದುಷ್ಕೃತ್ಯಗಳ ಅರ್ಧದಷ್ಟು ಸಮಾರ್ಯವು ಮಾಡಿತ್ತು.
ಸಮಾರ್ಯದವರಿಗಿಂತಲೂ ಹೆಚ್ಚಾದ ಭಯಂಕರ ಕೃತ್ಯ
ಗಳನ್ನು ನೀನು ಮಾಡಿರುತ್ತೀ. ನಿನ್ನ ಅಕ್ಕತಂಗಿಯರಿಗಿಂತ
ಹೆಚ್ಚಾಗಿ ನೀನು ದುಷ್ಕೃತ್ಯಗಳನ್ನು ಮಾಡಿರುತ್ತೀ.
ಸಮಾರ್ಯ ಮತ್ತು ಸೊದೋಮ್ ನಿನ್ನೊಂದಿಗೆ
ಹೋಲಿಸಿ ನೋಡಿದರೆ ಅವು ಒಳ್ಳೆಯ ಪಟ್ಟಣಗಳಂತೆ
ತೋರಿ ಬರುತ್ತವೆ. 52ಆದುದರಿಂದ ನಿನ್ನ ಅವಮಾನವನ್ನು
ನೀನು ಸಹಿಸಿಕೊಳ್ಳಬೇಕು. ನಿನಗಿಂತ ನಿನ್ನ ಸಹೋದರಿ
ಯರು ನೀತಿವಂತರಂತೆ ತೋರುತ್ತಾರೆ. ಯಾಕೆಂದರೆ ನಿನ್ನ
ಪಾಪಗಳು ಬಹಳ ಅಸಹ್ಯವಾಗಿದ್ದವು. ಆದ್ದರಿಂದ ನಿನಗೆ
ಅವಮಾನವಾಗಲೇಬೇಕು; ನೀನು ನಾಚಿಕೆಯನ್ನು
ಅನುಭವಿಸಲೇಬೇಕು ಯಾಕೆಂದರೆ ನೀನು ನಿನ್ನ
ಸಹೋದರಿಯರನ್ನು ನಿರಪರಾಧಿಗಳಾಗಿ ಕಾಣುವಂತೆ
ಮಾಡಿರುವೆ.''

53ದೇವರು ಹೇಳಿದ್ದೇನೆಂದರೆ: ''ಸೊದೋಮ್ ಮತ್ತು
ಅದರ ಸುತ್ತಲೂ ಇದ್ದ ನಗರಗಳನ್ನು ನಾನು ನಾಶ ಮಾಡಿ
ದೆನು. ನಾನು ಸಮಾರ್ಯವನ್ನು ನಾಶಮಾಡಿದೆನು. ಮತ್ತು
ಜೆರುಸಲೇಮೇ, ನಾನು ನಿನ್ನನ್ನು ನಾಶಮಾಡುವೆ. ಆದರೆ
ನಾನು ತಿರುಗಿ ಆ ಪಟ್ಟಣಗಳನ್ನು ಕಟ್ಟುವೆನು. ಜೆರುಸ
ಲೇಮೇ, ನಾನು ನಿನ್ನನ್ನೂ ಕಟ್ಟುವೆನು. 54ಆಗ, ನೀನು
ಮಾಡಿದ ಭಯಂಕರ ಕೃತ್ಯಗಳನ್ನು ನಿನ್ನ ನೆನಪಿಗೆ ತಂದು
ಕೊಳ್ಳುವೆ. ಆಗ ನೀನು ನಾಚಿಕೆಪಡುವಿ. ಅದೇ
ಸಮಯದಲ್ಲಿ ನೀನು ನಿನ್ನ ಸಹೋದರಿಯರನ್ನು ಸಂತೈ
ಸುವೆ. 55ಆಗ ನೀನೂ ನಿನ್ನ ಸಹೋದರಿಯರೂ ತಿರುಗಿ
ಕಟ್ಟಲ್ಪಡುವಿರಿ. ಸೊದೋಮಳೂ ಆಕೆಯ ಸುತ್ತಲಿರುವ
ಪಟ್ಟಣಗಳೂ, ಸಮಾರ್ಯಳು ಮತ್ತು ಆಕೆಯ ಸುತ್ತಲಿ
ರುವ ಪಟ್ಟಣಗಳೆಲ್ಲಾ ತಿರುಗಿ ಕಟ್ಟಲ್ಪಡುವವು.''

56ದೇವರು ಹೇಳಿದ್ದೇನೆಂದರೆ, ''ಹಿಂದೆ, ನೀನು ಜಂಭ
ದಿಂದ ನಿನ್ನ ತಂಗಿ ಸೊದೋಮಳ ವಿಷಯವಾಗಿ ಗೇಲಿ
ಮಾಡಿದ್ದೀ. ಹಾಗೆ ನೀನು ತಿರುಗಿ ಮಾಡುವದಿಲ್ಲ. 57ಈಗಿ
ನಂತೆ, ನಿನ್ನ ದುಷ್ಟತನವು ಹೊರಬರುವುದಕ್ಕಿಂತ ಮೊದಲು
ನೀನು ಅದನ್ನು ಮಾಡಿದೆ. ಈಗ ಎದೋಮಿನ ಹೆಣ್ಣು
ಮಕ್ಕಳು (ಪಟ್ಟಣಗಳು) ಮತ್ತು ಆಕೆಯ ನೆರೆಯವರು
ನಿನ್ನನ್ನು ಗೇಲಿ ಮಾಡುವರು. ಫಿಲಿಷ್ಟಿಯರ ಹೆಣ್ಣುಮಕ್ಕಳು
ಸಹ ನಿನ್ನನ್ನು ಗೇಲಿ ಮಾಡುವರು. ನಿನ್ನ ಸುತ್ತಲೂ
ಇರುವವರು ನಿನ್ನನ್ನು ಕಡೆಗಾಣಿಸುವರು. 58ಈಗ ನೀನು
ಮಾಡಿದ ಭಯಂಕರ ಕೃತ್ಯಗಳ ಸಲುವಾಗಿ ಶಿಕ್ಷೆ ಅನುಭವಿ
ಸಲೇಬೇಕು.'' ಇದು ಒಡೆಯನಾದ ಯೆಹೋವನ ನುಡಿ.

59ಈ ಮಾತುಗಳನ್ನು ನನ್ನ ಒಡೆಯನಾದ ಯೆಹೋ
ವನು ಹೇಳಿದನು. ''ನೀನು ಮಾಡಿರುವದನ್ನು ನಾನೂ
ನಿನಗೆ ಮಾಡುವೆನು. ನೀನು ನಿನ್ನ ಮದುವೆ ಒಡಂಬಡಿಕೆ
ಯನ್ನು ಮುರಿದುಬಿಟ್ಟೇ. ನಮ್ಮ ಒಡಂಬಡಿಕೆಗೆ ನೀನು
ಮಹತ್ವ ಕೊಡಲಿಲ್ಲ. 60ಆದರೆ ನೀನು ಎಳೆಯವಳಾಗಿ
ದ್ದಾಗ ನಿನ್ನೊಡನೆ ನಾನು ಮಾಡಿಕೊಂಡ ಒಡಂಬಡಿಕೆ
ಯನ್ನು ಜ್ಞಾಪಕ ಮಾಡಿಕೊಳ್ಳುತ್ತೇನೆ. ಮತ್ತು ನಾನು
ಅದನ್ನು ಶಾಶ್ವತವಾದ ಒಡಂಬಡಿಕೆಯನ್ನಾಗಿ ಮಾಡು
ವೆನು. 61ನಿನ್ನ ಅಕ್ಕತಂಗಿಯಂದಿರನ್ನು ನಾನು ನಿನ್ನ ಬಳಿಗೆ
ತಂದು ಅವರನ್ನು ನಿನ್ನ ಮಕ್ಕಳನ್ನಾಗಿ ಮಾಡುವೆನು. ಅದು
ನಮ್ಮ ಒಡಂಬಡಿಕೆಯಲ್ಲಿಲ್ಲದಿದ್ದರೂ ನಾನು ಅದನ್ನು
ನಿನಗಾಗಿ ಮಾಡುವೆನು. ಆಗ ನೀನು ಮಾಡಿದ ಭಯಂಕರ
ಸಂಗತಿಗಳನ್ನು ಜ್ಞಾಪಕಕ್ಕೆ ತಂದು ನೀನು ನಾಚಿಕೊಳ್ಳುವಿ.
62ನಾನು ನಿನ್ನೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವೆನು.
ಮತ್ತು ನಾನೇ ಯೆಹೋವನೆಂದು ನೀನು ತಿಳಿದು
ಕೊಳ್ಳುವೆ. 63ಹೀಗಿರಲು, ನಿನ್ನ ಕೃತ್ಯಗಳನ್ನೆಲ್ಲಾ ನಾನು
ಕ್ಷಮಿಸುವಾಗ, ನೀನು ಅವುಗಳನ್ನು ಜ್ಞಾಪಿಸಿಕೊಂಡು
ನಾಚಿಕೆಪಡುವೆ. ಅಹಂಕಾರದಿಂದ ಮಾತನಾಡಲು
ಮತ್ತೊಮ್ಮೆ ಬಾಯಿ ತೆರೆಯಲಾಗದಂತೆ ನೀನು ಬಹಳ
ವಾಗಿ ಅವಮಾನಿತಳಾಗುವೆ.'' ಇವು ನನ್ನ ಒಡೆಯನಾದ
ಯೆಹೋವನ ನುಡಿಗಳು.

17 ಯೆಹೋವನ ಮಾತುಗಳು ನನಗೆ ಬಂದವು.
ಆತನು ಹೇಳಿದ್ದೇನೆಂದರೆ, 2''ನರಪುತ್ರನೇ, ಈ
ಕಥೆಯನ್ನು ಇಸ್ರೇಲ್ ಜನಾಂಗಕ್ಕೆ ಹೇಳು. ಇದರ ಅರ್ಥ
ವೇನೆಂದು ಅವರನ್ನು ಕೇಳು. 3ಅವರಿಗೆ ಹೀಗೆ ಹೇಳು,
''ದೇವರಾದ ಯೆಹೋವನು ಇಂತೆನ್ನುತ್ತಾನೆ:

ಅಗಲವಾದ ರೆಕ್ಕೆಗಳುಳ್ಳ ದೊಡ್ಡ ಗರುಡಪಕ್ಷಿಯು
(ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚರ್)

ಲೆಬನೋನಿಗೆ ಬಂದಿತು. ಅದರ ರೆಕ್ಕೆಗಳು ಅನೇಕ
ಚುಕ್ಕೆಗಳನ್ನು ಹೊಂದಿತ್ತು.
4 ಆ ಗರುಡ ಪಕ್ಷಿಯು ದೇವದಾರು ಮರದ
(ಯೆಹೂದದ ರಾಜನಾದ ಯೆಹೋಯಾ
ಖೀನ್) ಮೇಲ್ಭಾಗವನ್ನು ಮುರಿದುಬಿಟ್ಟಿತು.
ಅದನ್ನು ವ್ಯಾಪಾರಿಗಳ ದೇಶಕ್ಕೆ ತಂದುಹಾಕಿತು.
5 ನಂತರ ಆ ಗರುಡವು ದೇಶದ ಬೀಜಗಳಲ್ಲಿ
ಒಂದನ್ನು (ಹಿಜ್ಕೀಯ) ತೆಗೆದುಕೊಂಡು ಅದನ್ನು
ಒಳ್ಳೆಯ ಮಣ್ಣಿನಲ್ಲಿ ಬಿತ್ತಿತು; ಸಮೃದ್ಧಿಕರವಾದ
ನೀರಿನ ಸಮೀಪದಲ್ಲಿ ಬೆಳೆಯುವ ನೀರ
ವಂಜಿಯಂತೆ ಅದನ್ನು ಬೆಳೆಯಿಸಿತು.
6 ಆ ಬೀಜವು ಚಿಗುರಿ, ಚಿಕ್ಕ ಜಾತಿಯ ದ್ರಾಕ್ಷಾ
ಲತೆಯಂತೆ ನೆಲದ ಮೇಲೆ ಹಬ್ಬಿಕೊಂಡು, ತನ್ನ
ಕೊಂಬೆಗಳನ್ನು ಗರುಡನ ಕಡೆಗೆ ಚಾಚಿಕೊಂಡು
ತನ್ನ ಬೇರುಗಳನ್ನು ಬಿಟ್ಟಿತು: ಅಂತೆಯೇ ಅದು ಲತೆ
ಯಾಗಿ ಕೊಂಬೆಗಳನ್ನು ಬೆಳೆಸಿ, ಎಲೆಗಳನ್ನು
ಹೊರಡಿಸಿತು.
7 ಆಗ ಅಗಲ ರೆಕ್ಕೆಗಳಿದ್ದ ಇನ್ನೊಂದು ಗರುಡ
ದ್ರಾಕ್ಷಾಲತೆಯನ್ನು ನೋಡಿತು. ಈ ಗರುಡನಿಗೆ
ತುಂಬಾ ಪುಕ್ಕಗಳಿದ್ದವು. ದ್ರಾಕ್ಷಾಲತೆಯು ತನ್ನ
ಬೇರುಗಳನ್ನು ಗರುಡನ ಕಡೆಗೆ ತಿರುಗಿಸಿತ್ತು.
ಗರುಡನಿಗೆ ನೀರು ಹಾಯಿಸಲು ಸಾಧ್ಯವಾಗು
ವಂತೆ ಅದು ತನ್ನ ರೆಂಬೆಗಳನ್ನು ಗರುಡನ ಕಡೆಗೆ
ಚಾಚಿಕೊಂಡಿತ್ತು. ಆದು ತಾನು ನೆಡಲ್ಪಟ್ಟಿದ್ದ
ಸ್ಥಳದಿಂದ ಬೇರೆ ಕಡೆಗೆ ತಿರುಗಿಕೊಂಡಿತು.
8 ಆ ದ್ರಾಕ್ಷಾಲತೆಯು ಸಮೃದ್ಧಿಕರವಾಗಿ ನೀರಿದ್ದ
ಒಳ್ಳೆಯ ಭೂಮಿಯಲ್ಲಿ ನೆಡಲ್ಪಟ್ಟಿತ್ತು. ಕೊಂಬೆ
ಗಳನ್ನು ಬೆಳೆಸಿ, ಹಣ್ಣುಗಳನ್ನು ಫಲಿಸಿ ಅಮೋಘ
ವಾದ ದ್ರಾಕ್ಷಾಲತೆಯಾಗಬೇಕೆಂಬುದು ಅದರ
ಬಯಕೆಯಾಗಿತ್ತು.''
9 ನೀನು ಹೀಗೆ ಹೇಳು: ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ: ''ಆ ದ್ರಾಕ್ಷಾ
ಲತೆಯು ಬದುಕಿ ಬೆಳೆಯುವುದೋ? ಇಲ್ಲ.
ಮೊದಲನೆ ಗರುಡನು ದ್ರಾಕ್ಷಾಲತೆಗಳ ಬೇರು
ಗಳನ್ನು ಎಳೆದುಹಾಕಿ, ಅದರ ದ್ರಾಕ್ಷಿ ಹಣ್ಣುಗಳನ್ನು
ಕಿತ್ತುಹಾಕುವುದು. ಆಗ ಚಿಗುರುಗಳು ಬಾಡಿ
ಒಣಗಿಹೋಗುವವು. ಆ ಸಸಿಯು ಬಲಹೀನ
ವಾಗುವುದು. ಆಗ ಆದನ್ನು ಬೇರುಸಹಿತ ಕಿತ್ತು
ಹಾಕಲು ಮಹಾ ಬಲವಾಗಲೀ ಅಥವಾ ದೊಡ್ಡ
ಸೈನ್ಯವಾಗಲೀ ಅಗತ್ಯವಿರುವದಿಲ್ಲ.
10 ಆ ಸಸಿಯು ನೆಟ್ಟಿದ ಸ್ಥಳದಲ್ಲಿ ಬೆಳೆಯುವುದೋ?
ಇಲ್ಲ. ಪೂರ್ವದ ಬಿಸಿ ಗಾಳಿಯು ಬೀಸುವದು. ಆಗ
ಸಸಿಯು ತಾನು ನೆಡಲ್ಪಟ್ಟಿದ್ದ ಸ್ಥಳದಲ್ಲೇ ಬಾಡಿ
ಹೋಗಿ ಸಾಯುವುದು.''

11 ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 12 ''ದಂಗೆಕೋರರಿಗೆ ಇದನ್ನು ಹೇಳು:
ಈ ಸಂಗತಿಗಳ ಅರ್ಥವು ನಿಮಗೆ ಗೊತ್ತಿಲ್ಲವೇ?' ಅವರಿಗೆ
ಹೇಳು: ಮೊದಲಿನ ಗರುಡ ಪಕ್ಷಿ ಬಾಬಿಲೋನ್ ರಾಜ
ನಾದ ನೆಬೂಕದ್ನೆಚ್ಚರನು. ಅವನು ಜೆರುಸಲೇಮಿಗೆ
ಬಂದು ಅದರ ರಾಜನನ್ನೂ ಅದರ ಹಿರಿಯರನ್ನೂ
ಬಂಧಿಸಿ, ಅವರನ್ನು ತನ್ನ ರಾಜ್ಯವಾದ ಬಾಬಿಲೋನಿಗೆ
ಕೊಂಡೊಯ್ದನು. 13 ಯೆಹೂದದ ರಾಜನನ್ನಾಗಿ
ಮಾಡುವದಾಗಿ ನೆಬೂಕದ್ನೆಚ್ಚರನು ರಾಜನ ಕುಟುಂಬ
ದವರಲ್ಲೊಬ್ಬನೊಡನೆ ಒಪ್ಪಂದಮಾಡಿಕೊಂಡು ತನಗೆ
(ನೆಬೂಕದ್ನೆಚ್ಚರನಿಗೆ) ಆಧೀನವಾಗಿರುವದಾಗಿ ಅವ
ನಿಂದ (ರಾಜನ ಕುಟುಂಬದವನಿಂದ) ಪ್ರಮಾಣ ಮಾಡಿಸಿ
ಕೊಂಡನು. ಅವನು ಯೆಹೂದದ ಬಲಿಷ್ಠರೆಲ್ಲರನ್ನು ಸಹ
ಈ ಒಪ್ಪಂದದಲ್ಲಿ ಸೇರಿಸಿದನು. 14 ಯೆಹೂದ ರಾಜ್ಯವು
ದೀನತೆಯಿಂದಿದ್ದು ದಂಗೆ ಏಳದೆ ತನ್ನ ಒಪ್ಪಂದಕ್ಕೆ ಶಾಶ್ವತ
ವಾಗಿ ಬದ್ಧವಾಗಿರಬೇಕೆಂಬುದು ನೆಬೂಕದ್ನೆಚ್ಚರನ
ಬಯಕೆಯಾಗಿತ್ತು

15 ಆದರೆ ಈ ಹೊಸ ರಾಜನು ನೆಬೂಕದ್ನೆಚ್ಚರನಿಗೆ
ತಿರುಗಿ ಬೀಳಲು ಪ್ರಯತ್ನಿಸಿದನು. ಅವನು ಈಜಿಪ್ಟಿಗೆ
ದೂತರನ್ನು ಕಳುಹಿಸಿ ಸಹಾಯವನ್ನು ಕೇಳಿದನು. ಬಹಳ
ಕುದುರೆಗಳನ್ನೂ ಸೈನಿಕರನ್ನೂ ಕೇಳಿದನು. ಯೆಹೂದದ
ಹೊಸ ರಾಜನು ತನ್ನ ಪ್ರಯತ್ನದಲ್ಲಿ ಜಯಶಾಲಿಯಾಗು
ವನು ಎಂದು ಭಾವಿಸುವಿರೋ? ಈ ಹೊಸ ರಾಜನು
ಒಪ್ಪಂದವನ್ನು ಮುರಿದು ಶಿಕ್ಷೆಯಿಂದ ಪಾರಾಗುವನೆಂದು
ನೀವು ಭಾವಿಸುವಿರೋ?''

16 ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ''ನನ್ನ ಜೀವದಾಣೆ, ಈ ಹೊಸ ರಾಜನು
ಬಾಬಿಲೋನಿನಲ್ಲಿ ಸಾಯುವನು. ಈ ಮನುಷ್ಯನನ್ನು
ಯೆಹೂದದ ರಾಜನನ್ನಾಗಿ ಮಾಡಿದ ರಾಜ ನೆಬೂಕ
ದ್ನೆಚ್ಚರನ ನಾಡಿನಲ್ಲಿ ಇವನು ಸಾಯುವನು. ಈ ಮನು
ಷ್ಯನು ಆ ರಾಜನೊಡನೆ ಮಾಡಿದ ಪ್ರಮಾಣವನ್ನು ತಿರಸ್ಕ
ರಿಸಿ ಆ ರಾಜನೊಡನೆ ಮಾಡಿಕೊಂಡಿದ್ದ ಒಪ್ಪಂದವನ್ನು
ಮುರಿದು ಹಾಕಿದನು. 17 ಈಜಿಪ್ಟಿನ ರಾಜನು ಯೆಹೂ
ದದ ರಾಜನನ್ನು ರಕ್ಷಿಸಲು ಸಾಧ್ಯವಿಲ್ಲ. ಅವನು ಬಹಳ
ಸೈನಿಕರನ್ನು ಕಳುಹಿಸಬಹುದು, ಆದರೆ ಈಜಿಪ್ಟಿನ ಶಕ್ತಿಯು
ಯೆಹೂದವನ್ನು ರಕ್ಷಿಸಲಾರದು. ನೆಬೂಕದ್ನೆಚ್ಚರನ
ಸೈನ್ಯವು ಕೆಸರಿನ ಇಳಿಜಾರುಗಳನ್ನೂ ತಡೆಗಟ್ಟುಗಳನ್ನೂ
ಕಟ್ಟಿ ಪಟ್ಟಣವನ್ನು ವಶಪಡಿಸಿಕೊಳ್ಳುವದು. ಎಷ್ಟೋ
ಮಂದಿ ಸಾಯುವರು. 18 ಆದರೆ ಯೆಹೂದದ ರಾಜನಿಗೆ

ತಪ್ಪಿಸಿಕೊಳ್ಳಲು ಸಾಧ್ಯವಾಗುವದಿಲ್ಲ. ಯಾಕೆಂದರೆ
ಅವನು ತನ್ನ ಪ್ರಮಾಣವನ್ನು ತಿರಸ್ಕರಿಸಿದನು ಮತ್ತು ತಾನು
ಮಾಡಿಕೊಂಡ ಒಪ್ಪಂದವನ್ನು ಮುರಿದು ಹಾಕಿದನು.
19ಆದುದರಿಂದ ನನ್ನ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ: ‘ನನ್ನ ಜೀವದಾಣೆ, ನಾನು ಯೆಹೂದದ
ರಾಜನನ್ನು ಶಿಕ್ಷಿಸುವೆನು. ಯಾಕೆಂದರೆ ಅವನು ನನ್ನ
ಮುಂದೆ ಮಾಡಿದ ಪ್ರಮಾಣಕ್ಕೆ ಗಮನ ಕೊಡಲಿಲ್ಲ ಮತ್ತು
ನಾನು ಸಾಕ್ಷಿಯಾಗಿದ್ದ ಒಪ್ಪಂದವನ್ನು ಅವನು ಮುರಿದು
ಹಾಕಿದನು.
20ನಾನು ಅವನಿಗೆ ಉರುಲನ್ನೊಡ್ಡುವೆನು; ಅವನು
ಅದರೊಳಗೆ ಸಿಕ್ಕಿಕೊಳ್ಳುವನು. ನಾನು ಅವನನ್ನು ಬಾಬಿ
ಲೋನಿಗೆ ತಂದು ಅಲ್ಲಿ ಶಿಕ್ಷಿಸುವೆನು. ಯಾಕೆಂದರೆ ಅವನು
ನನಗೆ ಅಪನಂಬಿಗಸ್ತನಾದನು. 21ಅವನ ಸೈನ್ಯವನ್ನು ನಾಶ
ಮಾಡುವೆನು. ಅವನಲ್ಲಿದ್ದ ಶೂರರನ್ನು ನಾಶ
ಮಾಡುವೆನು. ಅಳಿದುಳಿದವರನ್ನು ಗಾಳಿ ಬೀಸುವ ಪ್ರತಿ
ಯೊಂದು ದಿಕ್ಕಿನಲ್ಲಿಯೂ ಚದರಿಸಿಬಿಡುವೆನು. ಆಗ
ಯೆಹೋವನಾದ ನಾನು ನಿಮಗೆ ಇದನ್ನು ಹೇಳಿದೆನೆಂದು
ತಿಳಿಯುವದು.’’

22ನನ್ನ ಒಡೆಯನಾದ ಯೆಹೋವನು ಇದನ್ನು
ಹೇಳಿದನು:

‘‘ನಾನು ಎತ್ತರವಾದ ದೇವದಾರು ಮರದಿಂದ
ಒಂದು ಕೊಂಬೆಯನ್ನು ಕೀಳುವೆನು. ಆ ಮರದ
ಮೇಲಿನಲ್ಲಿರುವ ಒಂದು ಸಣ್ಣ ಕೊಂಬೆಯನ್ನು
ಕೀಳುವೆನು. ಅದನ್ನು ನಾನು ಎತ್ತರವಾದ ಪರ್ವತ
ದಲ್ಲಿ ನೆಡುವೆನು.
23 ಸ್ವತಃ ನಾನೇ ಅದನ್ನು ಇಸ್ರೇಲಿನ ಉನ್ನತವಾದ
ಪರ್ವತದ ಮೇಲೆ ನೆಡುವೆನು. ಅದು ಕೊಂಬೆಗ
ಳನ್ನು ಬೆಳೆಸಿ, ಫಲವನ್ನು ಫಲಿಸಿ, ಅಮೋಘವಾದ
ದೇವದಾರು ಮರವಾಗುವುದು; ಅದರ ಕೊಂಬೆ
ಗಳ ಮೇಲೆ ಅನೇಕ ಬಗೆಯ ಪಕ್ಷಿಗಳು ವಾಸಿಸು
ವವು. ಆದರ ಕೊಂಬೆಯ ನೆರಳಿನಲ್ಲಿ ವಿವಿಧ
ಬಗೆಯ ಪಕ್ಷಿಗಳು ವಾಸಿಸುವವು.

24‘‘ಆಗ ಬೇರೆ ಮರಗಳಿಗೆ, ನಾನು ದೊಡ್ಡ ಮರಗ
ಳನ್ನು ನೆಲಕ್ಕೆ ಬೀಳಿಸುವೆನೆಂತಲೂ, ಚಿಕ್ಕ ಮರಗ
ಳನ್ನು ಉದ್ದವಾಗಿ ಬೆಳೆಯುವಂತೆ ಮಾಡುತ್ತೇ
ನೆಂತಲೂ ಗೊತ್ತಾಗುವದು. ನಾನು ಹಸುರು ಮರ
ಗಳು ಒಣಗಿ ಹೋಗುವಂತೆಯೂ ಒಣಗಿ ಹೋದ
ಮರಗಳು ಹಸುರಾಗಿ ಬೆಳೆಯುವಂತೆಯೂ
ಮಾಡುತ್ತೇನೆ. ನಾನೇ ಯೆಹೋವನು. ಇದನ್ನು
ನಾನೇ ಹೇಳಿದ್ದೇನೆ; ಮತ್ತು ನಾನೇ ಇದನ್ನು ನೆರ
ವೇರಿಸುವೆನು.’’

18 ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 2‘‘ಇಸ್ರೇಲ್ ದೇಶದ ಕುರಿ
ತಾದ ಈ ಗಾದೆಯನ್ನು ನೀವೆಲ್ಲರೂ ಮರುನುಡಿಯುವು
ದೇಕೆ?

ಹೆತ್ತವರು ಹುಳಿ ದ್ರಾಕ್ಷಾಹಣ್ಣನ್ನು ತಿಂದಾಗ ಮಕ್ಕಳ
ಬಾಯಿ ಹುಳಿಯಾಗುವದು.*

3ಆದರೆ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ‘‘ಇಸ್ರೇಲಿನ ಜನರು ಇನ್ನು ಮುಂದಕ್ಕೆ ಈ
ಗಾದೆಯು ಸತ್ಯವೆಂದು ನೆನಸುವದಿಲ್ಲ.
4‘‘ಎಲ್ಲಾ ಪ್ರಾಣಗಳು ನನ್ನವೇ. ತಂದೆಯ ಪ್ರಾಣವೂ
ಮಗನ ಪ್ರಾಣವೂ ನನ್ನವೇ. ಪಾಪ ಮಾಡುವವನು ಮಾತ್ರ
ಸಾಯುವನು.
5‘‘ಒಬ್ಬ ವ್ಯಕ್ತಿ ನೀತಿವಂತನಾಗಿದ್ದರೆ. ಅವನು ಬಾಳು
ವನು. ಆ ಮನುಷ್ಯನು ಜನರನ್ನು ಸರಿಯಾದ ರೀತಿಯಲ್ಲಿ
ನೋಡುವನು. 6ಆ ನೀತಿವಂತ ಮನುಷ್ಯನು ಬೆಟ್ಟಗಳಿಗೆ
ಹೋಗಿ ಅಲ್ಲಿ ಸುಳ್ಳು ದೇವರಿಗೆ ಅರ್ಪಿಸಿದ ಆಹಾರದಲ್ಲಿ
ಪಾಲು ತೆಗೆದುಕೊಳ್ಳುವದಿಲ್ಲ. ಇಸ್ರೇಲಿನಲ್ಲಿರುವ ಆ
ಹೊಲಸು ವಿಗ್ರಹಗಳಿಗೆ ಅವನು ಪ್ರಾರ್ಥಿಸುವದಿಲ್ಲ.
ಅವನು ತನ್ನ ನೆರೆಯವನ ಹೆಂಡತಿಯೊಂದಿಗೆ ವ್ಯಭಿಚಾರ
ಮಾಡುವದಿಲ್ಲ. ತನ್ನ ಹೆಂಡತಿಯು ಮುಟ್ಟಾದಾಗ ಆಕೆ
ಯನ್ನು ಕೂಡುವದಿಲ್ಲ. 7ಆ ಒಳ್ಳೆಯ ಮನುಷ್ಯನು ಜನರ
ಬಲಹೀನತೆಯನ್ನು ದುರುಪಯೋಗಪಡಿಸಿಕೊಳ್ಳುವ
ದಿಲ್ಲ; ಸಾಲ ಮಾಡಿದವನ ಒತ್ತೆಯನ್ನು ಬಿಗಿಹಿಡಿಯುವ
ದಿಲ್ಲ; ಯಾರ ಸೊತ್ತನ್ನೂ ದರೋಡೆ ಮಾಡುವದಿಲ್ಲ;
ಹಸಿದವನಿಗೆ ಅನ್ನ ಕೊಡುವನು; ಬಟ್ಟೆಯಿಲ್ಲದನಿಗೆ ಬಟ್ಟೆ
ಕೊಡುವನು; 8ಅವನು ಸಾಲ ಕೊಡುವಾಗ ಬಡ್ಡಿ
ಹಾಕುವದಿಲ್ಲ. ಅವನು ಕೆಡುಕುಗಳನ್ನು ಮಾಡುವದಿಲ್ಲ.
ಅವನು ತನ್ನ ವ್ಯವಹಾರಗಳಲ್ಲಿ ಪ್ರತಿಯೊಬ್ಬನೊಂದಿಗೂ
ಯಥಾರ್ಥವಾಗಿಯೂ ನ್ಯಾಯವಾಗಿಯೂ ಇರುವನು.
9ಅವನು ನನ್ನ ನಿಯಮಗಳಿಗನುಸಾರವಾಗಿ ಜೀವಿಸುವನು
ಮತ್ತು ನನ್ನ ಕಟ್ಟಳೆಗಳಿಗೆ ನಂಬಿಗಸ್ತಿಕೆಯಿಂದ ವಿಧೇಯ
ನಾಗುವನು. ಅಂಥಾ ಮನುಷ್ಯನು ನೀತಿವಂತನಾಗಿದ್ದಾನೆ
ಮತ್ತು ಅವನು ಖಂಡಿತವಾಗಿಯೂ ಬದುಕುವನು.
10‘‘ಆದರೆ ಒಂದು ವೇಳೆ ಆ ನೀತಿವಂತನ ಮಗನು
ಒಳ್ಳೆಯ ಕಾರ್ಯಗಳನ್ನು ಮಾಡದೆ ದರೋಡೆ

**ಹೆತ್ತವರು… ಹುಳಿಯಾಗುವುದು** ಅಂದರೆ ಹೆತ್ತವರು ಮಾಡಿದ
ಪಾಪವನ್ನು ಮಕ್ಕಳು ಅನುಭವಿಸುವರು.

ಮಾಡುವವನೂ ಕೊಲೆ ಮಾಡುವವನೂ ಆಗಿರಬಹುದು.
11ಅವನ ತಂದೆಯು ಈ ಪಾಪಗಳಿಂದ ದೂರವಿದ್ದಾಗ್ಯೂ,
ಮಗನು ಈ ಪಾಪಗಳಲ್ಲಿ ಪ್ರತಿಯೊಂದನ್ನೂ ಮಾಡಿದ್ದಿರ
ಬಹುದು. ಆವನು ಬೆಟ್ಟದ ಮೇಲೆ ಹೋಗಿ ಅಲ್ಲಿ
ವಿಗ್ರಹಗಳಿಗೆ ಅರ್ಪಿಸಿದ ನೈವೇದ್ಯದಲ್ಲಿ ಪಾಲು ತೆಗೆದುಕೊಳ್ಳ
ಬಹುದು. ಆ ಕೆಟ್ಟ ಮಗನು ನೆರೆಯವನ ಹೆಂಡತಿ
ಯೊಂದಿಗೆ ವ್ಯಭಿಚಾರ ನಡೆಸಿದ್ದಿರಬಹುದು. 12ಬಡ,
ನಿಸ್ಸಹಾಯಕರಾದ ಜನರಿಗೆ ಕಿರುಕುಳ ಕೊಟ್ಟಿರಬಹುದು.
ಜನರ ನಿಸ್ಸಹಾಯ ಕತೆಯ ಪ್ರಯೋಜನ ಪಡೆಯುತ್ತಿರ
ಬಹುದು. ಒತ್ತೆಗೆ ತೆಗೆದುಕೊಂಡ ವಸ್ತುವನ್ನು ಹಿಂದಕ್ಕೆ
ಕೊಡಡದೆ ಇದ್ದಿರಬಹುದು. ಆ ಮಗನು ವಿಗ್ರಹಗಳಿಗೆ
ಪ್ರಾರ್ಥಿಸಿ ಇನ್ನೂ ಅನೇಕ ಭಯಂಕರ ಕೃತ್ಯಗಳನ್ನೂ
ಮಾಡಿದ್ದಿರಬಹುದು. 13ಆ ಕೆಟ್ಟ ಮಗನಿಂದ ಯಾರಾ
ದರೂ ಸಾಲ ತೆಗೆದುಕೊಂಡಿದ್ದರೆ ಅವನು ಅವರಿಂದ ಬಡ್ಡಿ
ಯನ್ನು ಕಡ್ಡಾಯವಾಗಿ ವಸೂಲು ಮಾಡಿದ್ದಿರಬಹುದು.
ಹೀಗಿರುವದರಿಂದ ಆ ಕೆಟ್ಟ ಮಗನು ಹೆಚ್ಚು ಕಾಲ ಬದುಕು
ವದಿಲ್ಲ. ಅವನು ಭಯಂಕರ ಕೃತ್ಯಗಳನ್ನು ಮಾಡಿರುವದ
ರಿಂದ ಕೊಲ್ಲಲ್ಪಡುವನು. ಅವನ ಮರಣಕ್ಕೆ ಅವನೇ
ಜವಾಬ್ದಾರನು.

14‘‘ಇಗೋ, ಆ ಕೆಟ್ಟ ಮಗನಿಗೆ ಒಬ್ಬ ಮಗನಿರ
ಬಹುದು. ತಂದೆ ಮಾಡುವ ದುಷ್ಟಕಾರ್ಯಗಳನ್ನು
ನೋಡಿದ ಅವನು ತಂದೆಯಂತೆ ಜೀವಿಸದಿರಬಹುದು.
15ಈ ಒಳ್ಳೇ ಮಗನು ಬೆಟ್ಟಕ್ಕೆ ಹೋಗಿ ಅಲ್ಲಿ ವಿಗ್ರಹಗಳಿಗೆ
ಅರ್ಪಿಸಿದ ನೈವೇದ್ಯವನ್ನು ತಿನ್ನುವದಿಲ್ಲ. ಅವನು ಇಸ್ರೇಲಿನ
ಹೊಲಸು ವಿಗ್ರಹಗಳಿಗೆ ಪ್ರಾರ್ಥಿಸುವದಿಲ್ಲ. ಅವನು ತನ್ನ
ನೆರೆಯವನ ಹೆಂಡತಿಯೊಂದಿಗೆ ವ್ಯಭಿಚಾರ ಮಾಡುವ
ದಿಲ್ಲ. 16ಆ ಒಳ್ಳೆಯ ಮಗನು ಯಾರ ಮೇಲೂ ದಬ್ಬಾಳಿಕೆ
ನಡೆಸುವದಿಲ್ಲ. ಅವನು ಒತ್ತೆಯಿಲ್ಲದೆ ಸಾಲ ಕೊಡುವನು.
ಅವನು ಯಾರನ್ನೂ ದರೋಡೆ ಮಾಡುವದಿಲ್ಲ. ಅವನು
ಹಸಿದವರಿಗೆ ಊಟ ಕೊಡುವನು; ಬಟ್ಟೆಯಿಲ್ಲದವರಿಗೆ
ಬಟ್ಟೆಯನ್ನು ಕೊಡುವನು. 17ಅವನು ಬಡವರಿಗೆ ನೋವು
ಮಾಡುವದಿಲ್ಲ. ಅವನು ಹಣವನ್ನು ಸಾಲಕೊಡುವಾಗ
ಬಡ್ಡಿ ಹಾಕುವದಿಲ್ಲ. ಅವನು ನನ್ನ ಕಟ್ಟಳೆಗಳಿಗೆ ವಿಧೇಯ
ನಾಗುವನು. ಮತ್ತು ನನ್ನ ನಿಯಮಗಳನ್ನು ಅನುಸರಿಸು
ವನು. ಈ ಒಳ್ಳೇ ಮಗನು ತಂದೆಯ ದುಷ್ಟತನದ ಕಾರಣ
ಕ್ಕಾಗಿ ಮರಣಶಿಕ್ಷೆಯನ್ನು ಅನುಭವಿಸುವದಿಲ್ಲ. ಆ ಒಳ್ಳೇ
ಮಗನು ಬಾಳುವನು. 18ತಂದೆಯು ಜನರನ್ನು ಹೆದರಿಸಿ
ಯಾಗಲೀ ದರೋಡೆ ಮಾಡಿಯಾಗಲೀ ವಸ್ತುಗಳನ್ನು
ತೆಗೆದುಕೊಂಡಿರಬಹುದು. ತನ್ನ ಜನರ ಮಧ್ಯದಲ್ಲಿ ಕೆಟ್ಟ
ದಾಗಿರುವುದನ್ನು ಅವನು ಮಾಡಿರಬಹುದು. ಆ
ತಂದೆಯು ತನ್ನ ಪಾಪಗಳಸಲುವಾಗಿ ಸಾಯುವನು. ಆದರೆ
ತಂದೆಯ ಪಾಪಗಳಿಗಾಗಿ ಮಗನು ಶಿಕ್ಷಿಸಲ್ಪಡುವದಿಲ್ಲ.

19‘‘‘ತಂದೆಯ ಪಾಪಗಳಿಗಿರುವ ಪ್ರತಿಫಲಗಳಲ್ಲಿ
ಯಾವುದನ್ನೂ ಮಗನು ಹೊತ್ತುಕೊಳ್ಳದಿರುವದೇಕೆ?’
ಎಂದು ನೀವು ಕೇಳಬಹುದು. ಮಗನು ನ್ಯಾಯವಾದು
ದ್ದನ್ನು ಮತ್ತು ಸರಿಯಾದುದ್ದನ್ನು ಮಾಡಿದ್ದಾನೆ. ಅವನು
ಎಚ್ಚರಿಕೆಯಿಂದ ನನ್ನ ಎಲ್ಲಾ ನಿಯಮಗಳಿಗೆ ವಿಧೇಯ
ನಾಗಿದ್ದನು. ಆದುದರಿಂದ ಅವನು ಬಾಳುವನು.
20ಯಾರು ಪಾಪ ಮಾಡುತ್ತಾರೋ ಅವರೇ ಮರಣಶಿಕ್ಷೆ
ಹೊಂದುವರು. ತಂದೆಯ ಪಾಪಗಳ ಪ್ರತಿಫಲಗಳಲ್ಲಿ
ಯಾವುದನ್ನೂ ಮಗನು ಹೊತ್ತುಕೊಳ್ಳುವುದಿಲ್ಲ. ಮತ್ತು
ಮಗನ ಪಾಪಗಳ ಪ್ರತಿಫಲಗಳಲ್ಲಿ ಯಾವುದನ್ನೂ
ತಂದೆಯು ಹೊತ್ತುಕೊಳ್ಳುವದಿಲ್ಲ. ಒಬ್ಬ ಒಳ್ಳೆ ಮನುಷ್ಯನ
ನೀತಿಯು ಅವನಿಗೇ ಸೇರಿದ್ದು. ಕೆಟ್ಟ ಮನುಷ್ಯನ
ದುಷ್ಟತ್ವವೂ ಆ ಕೆಟ್ಟ ಮನುಷ್ಯನಿಗೆ ಸೇರಿದ್ದಾಗಿದೆ.

21‘‘ಒಂದು ವೇಳೆ ದುಷ್ಟನೊಬ್ಬನು ತಾನು ಮಾಡಿದ
ಎಲ್ಲಾ ಪಾಪಗಳಿಗೆ ವಿಮುಖನಾದರೆ, ನನ್ನ ಎಲ್ಲಾ
ನಿಯಮಗಳಿಗೆ ವಿಧೇಯನಾದರೆ, ನ್ಯಾಯವಾದುದ್ದನ್ನೂ
ಸರಿಯಾದುದ್ದನ್ನೂ ಮಾಡಿದರೆ, ಅವನು ಸಾಯದೆ
ಬದುಕುವನು. 22ದೇವರು ಅವನ ಹಿಂದಿನ ಪಾಪಗಳನ್ನು
ನೆನಪಿಗೆ ತರುವದಿಲ್ಲ. ಅವನು ತಾನು ಮಾಡಿದ ಒಳ್ಳೆಯ
ಕಾರ್ಯಗಳ ನಿಮಿತ್ತ ಬದುಕುವನು.’’

23ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ‘‘ನನಗೆ ಪಾಪಿಗಳು ಸಾಯುವದರಲ್ಲಿ ಇಷ್ಟವಿಲ್ಲ.
ಅವರು ತಮ್ಮ ಜೀವಿತವನ್ನು ಬದಲಾಯಿಸಿ ಜೀವವನ್ನು
ಹೊಂದಬೇಕೆಂಬುದೇ ನನ್ನ ಅಪೇಕ್ಷೆಯಾಗಿದೆ.

24‘‘ಒಂದುವೇಳೆ ಒಳ್ಳೆಯವನೊಬ್ಬನು ತನ್ನ ಒಳ್ಳೆಯ
ತನವನ್ನು ಬಿಟ್ಟು ಪಾಪ ಮಾಡಬಹುದು; ದುಷ್ಟರು
ಮಾಡುವ ಅಸಹ್ಯಕೃತ್ಯಗಳನ್ನೆಲ್ಲ ಮಾಡಬಹುದು. ಅವನು
ಹೀಗೆ ಮಾಡುತ್ತಾ ಬದುಕಲು ಸಾಧ್ಯವೇ ಇಲ್ಲ! ಅವನು
ಅಪ ನಂಬಿಗಸ್ತನಾದ್ದರಿಂದ ಮತ್ತು ಪಾಪ ಮಾಡಿದ್ದರಿಂದ
ದೇವರು ಅವನ ಎಲ್ಲಾ ಒಳ್ಳೆಯ ಕಾರ್ಯಗಳನ್ನೂ ಮರೆತು
ಬಿಡುವನು. ಅವನು ತನ್ನ ಪಾಪಗಳ ದೆಸೆಯಿಂದ
ಸಾಯುವನು.’’

25ದೇವರು ಹೇಳಿದ್ದೇನೆಂದರೆ: ‘‘ಒಂದು ವೇಳೆ ನೀವು
ಹೇಳಬಹುದು: ‘ನನ್ನ ಒಡೆಯನಾದ ದೇವರ ಕ್ರಮವು
ದೃಢವಾಗಿಲ್ಲ.’ ಆದರೆ, ಇಸ್ರೇಲಿನ ಜನರೇ, ಕೇಳಿರಿ. ನಿಮ್ಮ
ನಡತೆಯೇ ದೃಢವಾಗಿಲ್ಲ. 26ಒಬ್ಬ ಒಳ್ಳೆಯವನು ಬದ
ಲಾವಣೆ ಹೊಂದಿ ಕೆಟ್ಟಕಾರ್ಯಗಳನ್ನು ಮಾಡಿದರೆ, ಅವನ
ದುಷ್ಟತ್ವಕ್ಕಾಗಿ ಅವನು ಸಾಯಲೇಬೇಕು. 27ಆದರೆ ಒಬ್ಬ
ಪಾಪಿ ಬದಲಾವಣೆ ಹೊಂದಿ ನೀತಿವಂತನಾಗಿ ಬಾಳಿದರೆ
ಅವನು ತನ್ನ ಪ್ರಾಣವನ್ನು ಉಳಿಸಿಕೊಳ್ಳುವನು. 28ತಾನು
ಎಷ್ಟು ಕೆಟ್ಟವನಾಗಿ ಜೀವಿಸಿದನೆಂದು ತಿಳಿದು ನನ್ನ ಕಡೆಗೆ
ತಿರುಗಿ ದುಷ್ಟತನ ಮಾಡುವದನ್ನು ನಿಲ್ಲಿಸಿದನು. ಅಂಥ
ವನು ಸಾಯದೆ, ಬಾಳುವನು.’’

29ಆದರೆ ಇಸ್ರೇಲ್ ಜನರು, ''ಅದು ಸರಿಯಲ್ಲ, ನನ್ನ
ಒಡೆಯನಾದ ಯೆಹೋವನ ಕ್ರಮವು ದೃಢವಲ್ಲ'
ಎಂದರು. ಆಗ ದೇವರು ''ನಾನು ದೃಢವಾಗಿದ್ದೇನೆ. ನಿಮ್ಮ
ನಡತೆಯೇ ದೃಢವಾಗಿಲ್ಲ.
30ಇಸ್ರೇಲರೇ, ನಾನು
ಪ್ರತಿಯೊಬ್ಬನನ್ನು ಅವನವನ ಕೃತ್ಯಗಳ ಪ್ರಕಾರ ನ್ಯಾಯ
ತೀರಿಸುವೆನು'' ಎಂದು ಹೇಳಿದನು. ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ: ''ಆದುದರಿಂದ ನನ್ನ
ಬಳಿಗೆ ಬನ್ನಿರಿ, ದುಷ್ಟತನ ಮಾಡುವದನ್ನು ನಿಲ್ಲಿಸಿರಿ,
ಪಾಪವು ನಿಮ್ಮ ನಾಶನಕ್ಕೆ ಕಾರಣವಾಗದಂತೆ ಎಚ್ಚರಿಕೆ
ಯಾಗಿರಿ.
31ನಿಮ್ಮ ದಂಗೆಕೋರತನದ ಮಾರ್ಗಗಳನ್ನೆಲ್ಲ
ತೊರೆದುಬಿಟ್ಟು ನಿಮ್ಮ ಹೃದಯವನ್ನೂ ಆತ್ಮವನ್ನೂ
ನೂತನ ಮಾಡಿಕೊಳ್ಳಿರಿ. ಇಸ್ರೇಲ್ ಜನರೇ, ನೀವು
ಮರಣವನ್ನು ಬರಮಾಡಿಕೊಳ್ಳುವುದೇಕೆ?
32ನಿಮ್ಮನ್ನು
ಸಾಯಿಸಲು ನನಗೆ ಇಷ್ಟವಿಲ್ಲ. ನೀವು ನನ್ನ ಕಡೆಗೆ
ಹಿಂದಿರುಗಿ ಜೀವಿಸಿರಿ.'' ಇದು ನನ್ನ ಒಡೆಯನಾದ
ಯೆಹೋವನ ನುಡಿ.

19 ದೇವರು ನನಗೆ, ''ಇಸ್ರೇಲರ ಅಧಿಪತಿಗಳ
ವಿಷಯವಾದ ಈ ಶೋಕಗೀತೆಯನ್ನು ನೀನು
ಹಾಡಬೇಕು'' ಎಂದು ಹೇಳಿದನು:

2 '''ನಿನ್ನ ತಾಯಿಯ ಏನಾಗಿದ್ದಳು? ಆಕೆಯು ಸಿಂಹಗಳ
ಮಧ್ಯದಲ್ಲಿ ಸಿಂಹಿಣಿಯಾಗಿದ್ದಳು. ಆಕೆಯು
ಪ್ರಾಯದ ಸಿಂಹಗಳೊಡನೆ ಮಲಗಿ ತನ್ನ
ಮರಿಗಳನ್ನು ಸಾಕಿದಳು.
3 ಮರಿಗಳಲ್ಲೊಂದು ಎದ್ದು ಗಟ್ಟಿಮುಟ್ಟಾದ ಸಿಂಹ
ವಾಗಿ ಬೆಳೆಯುತ್ತಾ ಬಂತು. ತನ್ನ ಆಹಾರವನ್ನು
ತಾನೇ ಬೇಟೆಯಾಡಿತು. ಅದು ಮನುಷ್ಯನ
ಮಾಂಸವನ್ನು ತಿಂದಿತು.
4 ಅದು ಘರ್ಜಿಸುವ ಶಬ್ದವನ್ನು ಜನರು ಕೇಳಿದರು.
ಜನಾಂಗಗಳು ಅವನ ಬಗ್ಗೆ ಕೇಳಿದರು. ಅವನನ್ನು
ತಮ್ಮ ಗುಂಡಿಯಲ್ಲಿ ಅವರು ಬಂಧಿಸಿದರು. ಅವರು
ಅವನ ಬಾಯಿಗೆ ಕೊಂಡಿಯನ್ನು ಹಾಕಿ ಈಜಿಪ್ಟಿಗೆ
ಅವನನ್ನು ಕೊಂಡೊಯ್ದುರು.
5 ಆ ಸಿಂಹಿಣಿಯು ತನಗಾದ ನಿರಾಶೆಯನ್ನೂ ತನ್ನ
ಮರಿಸಿಂಹದ ಮೇಲೆ ತನಗಿದ್ದ ನಿರೀಕ್ಷೆ ಹಾಳಾದ
ದ್ದನ್ನೂ ಕಂಡು, ತನ್ನ ಮರಿಗಳಲ್ಲಿ ಮತ್ತೊಂದನ್ನು
ತೆಗೆದುಕೊಂಡು ಅದನ್ನು ಪ್ರಾಯದ ಸಿಂಹವನ್ನಾಗಿ
ಮಾಡಿದಳು.
6 ಅದು ಬೆಳೆದು ಪ್ರಾಯದ ಸಿಂಹವಾಗಿ ಸಿಂಹಗ
ಳೊಂದಿಗೆ ಬೇಟೆಯಾಡಲು ಹೋಯಿತು; ತನ್ನ
ಆಹಾರವನ್ನು ತಾನೇ ಬೇಟೆಯಾಡ ತೊಡಗಿ
ಮನುಷ್ಯರನ್ನು ಕೊಂದು ತಿನ್ನಲಾರಂಭಿಸಿತು.
7 ಅವನು ಸ್ತ್ರೀಯರನ್ನು ವಿಧವೆಯರನ್ನಾಗಿ
ಮಾಡಿತು; ಪಟ್ಟಣಗಳನ್ನು ನಿರ್ಜನವನ್ನಾಗಿ
ಮಾಡಿತು; ಅದು ಗರ್ಜಿಸಿದಾಗ ದೇಶವೂ ಅದರ
ಲ್ಲಿರುವ ಪ್ರತಿಯೊಂದೂ ಭಯಗೊಂಡವು.
8 ಸುತ್ತಮುತ್ತಲಿನ ಜನಾಂಗಗಳವರು ಅದರ ವಿರುದ್ಧ
ವಾಗಿ ನಡೆದು, ಬಲೆ ಹರಡಿ ಅದನ್ನು ಬಂಧಿಸಿದರು.
9 ಅವರು ಅದನ್ನು ಮರದ ಪಂಜರದಲ್ಲಿಟ್ಟು ಕೊಂಡಿ
ಗಳನ್ನು ಹಾಕಿ, ಬಾಬಿಲೋನಿನ ರಾಜನ ಬಳಿಗೆ
ಕೊಂಡೊಯ್ದರು. ಅದರ ಗರ್ಜನೆಯು ಇಸ್ರೇಲಿನ
ಪರ್ವತಗಳ ಮೇಲೆ ಇನ್ನೆಂದಿಗೂ ಕೇಳದಿರಲಿ
ಎಂದು ಅದನ್ನು ಅಲ್ಲಿ ಸೆರೆಮನೆಗೆ ಹಾಕಿದರು.
10 ನಿನ್ನ ತಾಯಿಯು ನೀರಾವರಿಯಲ್ಲಿ ನೆಟ್ಟ ದ್ರಾಕ್ಷಾ
ಲತೆಯಂತಿದ್ದಳು. ಬೇಕಾದಷ್ಟು ನೀರು ಇದ್ದುದ
ರಿಂದ ಅದು ಫಲಭರಿತವಾಗಿದ್ದು ಅನೇಕ ಕೊಂಬೆ
ಗಳನ್ನು ಹೊಂದಿತ್ತು.
11 ಅದು ಬಲವಾದ ಕಾಂಡಗಳನ್ನು ಬೆಳೆಸಿತು. ಅದರ
ಕಾಂಡಗಳು ಅಧಿಪತಿಗಳ ರಾಜದಂಡದಂತಿದ್ದವು.
ಅವುಗಳಲ್ಲಿ ಒಂದು ಮೋಡಗಳ ಮಧ್ಯದಲ್ಲಿ ಎತ್ತರ
ವಾಗಿ ಬೆಳೆಯಿತು. ಆದು ತನ್ನ ಎತ್ತರದಿಂದ ಮತ್ತು
ತನ್ನ ಅನೇಕ ಕೊಂಬೆಗಳಿಂದ ಎದ್ದು ಕಾಣುತ್ತಿತ್ತು.
12 ಆದರೆ ಕೋಪದಿಂದ ದ್ರಾಕ್ಷಾಲತೆಯು ಬೇರು
ಸಮೇತ ಕಿತ್ತು ಹಾಕಲ್ಪಟ್ಟಿತು. ಅದು ನೆಲದ ಮೇಲೆ
ಬಿಸಾಡಲ್ಪಟ್ಟಿತು. ಪೂರ್ವದ ಬಿಸಿ ಗಾಳಿಯು ಅದರ
ಹಣ್ಣುಗಳನ್ನು ಒಣಗಿಸಿತು. ಅದರ ಬಲವಾದ
ಕೊಂಬೆಗಳು ಮುರಿಯಲ್ಪಟ್ಟವು. ಅವುಗಳನ್ನು
ಬೆಂಕಿಯು ಸುಟ್ಟುಹಾಕಿತು.
13 ಈಗ ಆ ದ್ರಾಕ್ಷಾಬಳ್ಳಿಯನ್ನು ಮರುಭೂಮಿಯಲ್ಲಿ
ನೆಡಲ್ಪಟ್ಟಿರುತ್ತದೆ. ಅದು ನೀರಿಲ್ಲದ ಬಂಜರು
ಭೂಮಿ.
14 ಅದರ ಸ್ವಂತ ಕಾಂಡದಿಂದಲೇ ಬೆಂಕಿಯು
ಹೊರಟುಬಂದು ಅದರ ಚಿಕ್ಕ ಕೊಂಬೆಗಳನ್ನು
ಮತ್ತು ಫಲಗಳನ್ನು ನಾಶಮಾಡಿತು. ಈಗ ಬಲ
ವಾದ ಕಾಂಡ ಅದರಲ್ಲಿಲ್ಲ. ಆಳುವದಕ್ಕೆ ರಾಜ
ದಂಡವೂ ಅದರಲ್ಲಿಲ್ಲ.'

ಇದು ಮರಣದ ಶೋಕಗೀತೆ. ಇದನ್ನು ಶೋಕ
ಗೀತೆಯನ್ನಾಗಿಯೇ ಬಳಸಲಾಗುತ್ತಿದೆ.''

20 ಮಾರ್ಗದರ್ಶನಕ್ಕಾಗಿ ಯೆಹೋವನನ್ನು
ಕೇಳಲು ಒಂದು ದಿನ ಇಸ್ರೇಲಿನ ಹಿರಿಯರಲ್ಲಿ
ಕೆಲವರು ನನ್ನ ಬಳಿಗೆ ಬಂದರು. ಅದು ಸೆರೆವಾಸದ ಏಳನೆ
ವರ್ಷದ ಐದನೆ ತಿಂಗಳಿನ ಹತ್ತನೆಯ ದಿನ. ಹಿರಿಯರು
ನನ್ನ ಎದುರಿನಲ್ಲಿ ಕುಳಿತುಕೊಂಡರು.

2ಆಗ ಯೆಹೋವನ ಸಂದೇಶ ನನಗೆ ಬಂದಿತು. ಆತನು
ಹೇಳಿದ್ದೇನೆಂದರೆ, 3“ನರಪುತ್ರನೇ, ಇಸ್ರೇಲಿನ ಹಿರಿಯ
ರೊಂದಿಗೆ ಮಾತಾಡಿ ಅವರಿಗೆ, ‘ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ: ನೀವು ನನ್ನ ಬುದ್ಧಿವಾದ
ವನ್ನು ಕೇಳಲು ಬಂದಿರುವಿರಾ? ನನ್ನ ಜೀವದಾಣೆ, ನನ್ನ
ಬುದ್ಧಿವಾದವನ್ನು ನಿಮಗೆ ಹೇಳುವದಿಲ್ಲವೆಂದು ನಾನು
ಪ್ರಮಾಣ ಮಾಡುತ್ತೇನೆ. ನನ್ನ ಒಡೆಯನಾದ ಯೆಹೋ
ವನ ವಾಕ್ಯವಿದು. 4ನರಪುತ್ರನೇ, ನೀನು ಅವರ ನ್ಯಾಯ
ತೀರಿಸುವಿಯಾ? ಅವರ ಪೂರ್ವಿಕರು ಮಾಡಿದ ಭಯಂ
ಕರ ಸಂಗತಿಗಳನ್ನು ನೀನು ಅವರಿಗೆ ಹೇಳಬೇಕು. 5ನೀನು
ಅವರಿಗೆ, ‘ನನ್ನ ಒಡೆಯನಾದ ಯೆಹೋವನು ಇಂತೆನ್ನು
ತ್ತಾನೆ: ನಾನು ಇಸ್ರೇಲನ್ನು ಆರಿಸಿಕೊಂಡ ದಿವಸ ನಾನು
ನನ್ನನ್ನು ಈಜಿಪ್ಟ್ ದೇಶದಲ್ಲಿ ಅವರಿಗೆ ಪ್ರಕಟಿಸಿ
ಕೊಂಡೆನು. ನಾನು ನನ್ನ ಕೈಯನ್ನು ಮೇಲೆತ್ತಿ
ಯಾಕೋಬನ ಕುಟುಂಬಕ್ಕೆ ವಾಗ್ದಾನ ಮಾಡಿದೆನು.
ನಾನು ಅವರಿಗೆ, “ನಿಮ್ಮ ಒಡೆಯನಾದ ಯೆಹೋವನು
ನಾನೇ” ಎಂದು ಹೇಳಿದೆನು. 6“ಅವರನ್ನು ಈಜಿಪ್ಟಿನಿಂದ
ಹೊರಗೆ ತಂದು, ನಾನು ಅವರಿಗಾಗಿ ಹುಡುಕಿಟ್ಟಿರುವ
ದೇಶಕ್ಕೆ ಕರೆದುಕೊಂಡು ಹೋಗುವುದಾಗಿ ವಾಗ್ದಾನ
ಮಾಡಿದೆನು. ಅದು ಹಾಲೂ ಜೇನೂ ಹರಿಯುವ ದೇಶ
ವಾಗಿತ್ತು. ಅದು ಎಲ್ಲಾ ದೇಶಗಳಿಗಿಂತಲೂ ಸುಂದರ ವಾದ
ದೇಶ.

7“ನಾನು ಇಸ್ರೇಲ್ ಜನಾಂಗದವರಿಗೆ, ಅವರಲ್ಲಿದ್ದ
ಅಸಹ್ಯವಾದ ಎಲ್ಲಾ ವಿಗ್ರಹಗಳನ್ನು ಬಿಸಾಡಿಬಿಡಲು ಹೇಳಿ
ದೆನು. ಈಜಿಪ್ಟಿನ ಹೊಲಸು ವಿಗ್ರಹಗಳಿಂದ ಹೊಲಸು
ಆಗಬಾರದು ಎಂದು ಹೇಳಿದೆನು. ನಾನು ನಿಮ್ಮ ದೇವ
ರಾದ ಯೆಹೋವನು.” 8ಆದರೆ ಅವರು ನನ್ನ ವಿರುದ್ಧ
ವಾಗಿ ಎದ್ದು ನನ್ನ ಮಾತುಗಳನ್ನು ಕೇಳದೆ ಹೋದರು.
ತಮ್ಮ ವಿಗ್ರಹಗಳನ್ನು ಬಿಸಾಡಿಬಿಡಲಿಲ್ಲ. ಈಜಿಪ್ಟಿನ ವಿಗ್ರಹ
ಗಳನ್ನು ತೊರೆದು ಬಿಡಲಿಲ್ಲ. ಆದುದರಿಂದ ನಾನು ಅವ
ರನ್ನು (ಇಸ್ರೇಲರನ್ನು) ಈಜಿಪ್ಟಿನಲ್ಲಿಯೇ ನಾಶಮಾಡಿ
ನನ್ನ ರೋಷಾಗ್ನಿಯನ್ನು ತೀರಿಸಿಕೊಳ್ಳಲು ಆಲೋಚಿಸಿ
ದೆನು. 9ಆದರೆ ನಾನು ಅವರನ್ನು ನಾಶಮಾಡಲಿಲ್ಲ.
ಇಸ್ರೇಲರು ವಾಸವಾಗಿರುವ ಸ್ಥಳದಲ್ಲಿ ಜನರ ಮುಂದೆ ನನ್ನ
ಹೆಸರನ್ನು ಅವಮಾನಕ್ಕೆ ಗುರಿಮಾಡಲು ನನಗೆ ಇಷ್ಟವಿರ
ಲಿಲ್ಲ. ಈಜಿಪ್ಟಿನಿಂದ ಹೊರಗೆ ತರುತ್ತೇನೆಂಬ ವಾಗ್ದಾನ
ದೊಡನೆ ನಾನು ಇಸ್ರೇಲರಿಗೆ ಪ್ರಕಟಿಸಿಕೊಂಡಿದ್ದನ್ನು
ಅವರು ನೋಡಿದ್ದರು. ಆದ್ದರಿಂದ ನಾನು ಇಸ್ರೇಲರನ್ನು
ಅವರ ಮುಂದೆ ನಾಶಮಾಡಲಿಲ್ಲ. 10ನಾನು ಇಸ್ರೇಲ್
ಜನಾಂಗವನ್ನು ಈಜಿಪ್ಟಿನಿಂದ ಹೊರತಂದು ಅಡವಿ
ಪ್ರದೇಶದಲ್ಲಿ ನಡೆಸಿದೆನು. 11ಅಲ್ಲಿ ಅವರಿಗೆ ಧರ್ಮ
ಶಾಸ್ತ್ರವನ್ನು ಕೊಟ್ಟೆನು. ನನ್ನ ವಿಧಿನಿಯಮಗಳನ್ನು
ತಿಳಿಸಿದೆನು. ಅವುಗಳನ್ನು ಕೈಕೊಂಡು ನಡೆಯುವ ಎಲ್ಲರೂ
ಜೀವಿಸುತ್ತಾರೆ. 12ಅವರ ವಿಶ್ರಾಂತಿ ದಿವಸಗಳ ಬಗ್ಗೆ
ತಿಳಿಸಿದೆನು. ಆ ವಿಶೇಷ ದಿವಸಗಳು ನನಗೂ ಅವರಿಗೂ
ಇರುವ ಸಂಬಂಧಕ್ಕೆ ಒಂದು ಗುರುತಾಗಿತ್ತು. ನಾನೇ
ಯೆಹೋವನೆಂದೂ ನಾನು ಅವರನ್ನು ನನಗೆ ವಿಶೇಷ
ವಾದವರನ್ನಾಗಿ ಮಾಡಿಕೊಳ್ಳುತ್ತಿರುವೆನೆಂದೂ ಅವು
ತೋರಿಸುತ್ತಿದ್ದವು.

13“‘ಆದರೆ ಇಸ್ರೇಲ್ ಜನರು ಅಡವಿಯಲ್ಲಿರುವಾಗ
ನನಗೆ ತಿರುಗಿ ಬಿದ್ದರು. ನನ್ನ ಆಜ್ಞೆಗಳನ್ನು ಅವರು
ಅನುಸರಿಸಲಿಲ್ಲ. ನನ್ನ ನಿಯಮಗಳಿಗೆ ವಿಧೇಯರಾಗಲು
ನಿರಾಕರಿಸಿದರು. ಆ ಆಜ್ಞೆಗಳೆಲ್ಲಾ ನ್ಯಾಯವಾದವುಗಳೇ.
ಒಬ್ಬನು ಆ ಆಜ್ಞೆಗಳಿಗೆ ವಿಧೇಯನಾದರೆ ಅವನು ಬಾಳು
ವನು. ನಾನು ನೇಮಿಸಿದ ವಿಶ್ರಾಂತಿ ದಿವಸಗಳನ್ನು ಅಲಕ್ಷ್ಯ
ಮಾಡಿದರು. ಆ ದಿವಸಗಳಲ್ಲಿ ಅವರು ಎಷ್ಟೋ ಸಾರಿ ಕೆಲಸ
ಮಾಡಿದರು. ನನ್ನ ರೌದ್ರದ ತೀವ್ರತೆಯನ್ನು ಅವರು
ಅರಿತುಕೊಳ್ಳಲೆಂದು ನಾನು ಅವರನ್ನು ಅಡವಿಯಲ್ಲಿ
ದಂಡಿಸಿ ನಾಶಮಾಡಲು ಆಲೋಚಿಸಿಕೊಂಡೆನು.
14ಆದರೆ ನಾನು ಅವರನ್ನು ನಾಶಮಾಡಲಿಲ್ಲ. ಬೇರೆ
ದೇಶದವರು ನಾನು ಅವರನ್ನು ಈಜಿಪ್ಟಿನಿಂದ ಬಿಡಿಸಿ
ತರುವದನ್ನು ನೋಡಿದರು. ನನ್ನ ಒಳ್ಳೆಯ ಹೆಸರನ್ನು
ಅವರೆದುರಿನಲ್ಲಿ ಅವಮಾನಪಡಿಸುವದಕ್ಕೆ ನನಗೆ ಇಷ್ಟವಿರ
ಲಿಲ್ಲ. ಆದುದರಿಂದ ಅವರ ಮುಂದೆ ಇಸ್ರೇಲನ್ನು ನಾಶ
ಮಾಡಲಿಲ್ಲ. 15ಅವರು ಅಡವಿಯಲ್ಲಿದ್ದಾಗ ನಾನು
ಮತ್ತೊಂದು ಪ್ರಮಾಣವನ್ನು ಮಾಡಿದೆನು. ನಾನು
ಅವರಿಗೆ ಕೊಟ್ಟಿದ್ದ ದೇಶಕ್ಕೆ ಅವರನ್ನು ಹೋಗಗೊಡಿಸು
ವದಿಲ್ಲ ಎಂದು ಪ್ರಮಾಣ ಮಾಡಿದೆನು. ಆ ದೇಶವು
ಅತ್ಯುತ್ತಮವಾಗಿತ್ತು. ಎಲ್ಲಾ ದೇಶಗಳಿಗಿಂತ ಬಹು
ಸುಂದರವಾದ ದೇಶ.

16“‘ಇಸ್ರೇಲ್ ಜನರು ನನ್ನ ಆಜ್ಞೆಗಳಿಗೆ ವಿಧೇಯ
ರಾಗಲು ನಿರಾಕರಿಸಿದರು. ನನ್ನ ಕಟ್ಟಳೆಗಳನ್ನು ಅವರು
ಅನುಸರಿಸಲಿಲ್ಲ. ನಾನು ತಿಳಿಸಿದ ವಿಶ್ರಾಂತಿ ದಿವಸಗಳನ್ನು
ಆಚರಿಸಲಿಲ್ಲ. ಅವರ ಮನಸ್ಸು ಆ ಹೊಲಸು ದೇವರುಗಳ
ಮೇಲೆ ನೆಟ್ಟಿದ್ದರಿಂದ ಅವರು ಹಾಗೆಲ್ಲಾ ಮಾಡಿದರು.
17ಆದರೆ ನಾನು ಅವರಿಗಾಗಿ ದುಃಖಗೊಂಡೆನು. ಆದುದ
ರಿಂದ ಅವರನ್ನು ನಾನು ನಾಶಮಾಡಲಿಲ್ಲ. ಮರುಭೂಮಿ
ಯಲ್ಲಿ ಅವರನ್ನು ಸಂಪೂರ್ಣವಾಗಿ ನಾಶಮಾಡಲಿಲ್ಲ.
18ಅವರ ಮಕ್ಕಳಿಗೆ ನಾನು ಬುದ್ಧಿಹೇಳುತ್ತಾ, “ನಿಮ್ಮ
ಪೂರ್ವಿಕರಂತೆ ನೀವಾಗಬೇಡಿರಿ. ಅವರ ಅಸಹ್ಯವಾದ
ವಿಗ್ರಹಗಳಿಂದ ನಿಮ್ಮನ್ನು ನೀವು ಅಶುದ್ಧ ಮಾಡಿಕೊಳ್ಳ
ಬೇಡಿರಿ. ಅವರ ಕಟ್ಟಳೆಗಳನ್ನು ಅನುಸರಿಸಬೇಡಿರಿ. ಅವರ
ಆಜ್ಞೆಗಳಿಗೆ ವಿಧೇಯರಾಗಬೇಡಿರಿ. 19ನಾನೇ ನಿಮ್ಮ
ದೇವರಾದ ಯೆಹೋವನು. ನನ್ನ ಕಟ್ಟಳೆಗಳಿಗೆ ವಿಧೇಯ

ರಾಗಿರಿ, ನನ್ನ ಆಜ್ಞೆಗಳನ್ನು ಅನುಸರಿಸಿರಿ. ನಾನು ಹೇಳಿ
ದವುಗಳನ್ನು ಮಾಡಿರಿ. 20ನಾನು ನೇಮಿಸಿದ ವಿಶ್ರಾಂತಿ
ದಿವಸಗಳು ಮಹತ್ವವಾದವುಗಳೆಂದು ಎಣಿಸಿರಿ. ನನ್ನ
ಮತ್ತು ನಿಮ್ಮ ಸಂಬಂಧಕ್ಕೆ ಅವು ಗುರುತುಗಳಾಗಿವೆ. ನಾನು
ನಿಮ್ಮ ಕರ್ತನು. ನಾನೇ ನಿಮ್ಮ ದೇವರಾದ ಯೆಹೋವ
ನೆಂದು ತಿಳಿದುಕೊಳ್ಳಲು ಇವುಗಳು ಸಾಕ್ಷಿಗಳಾಗಿವೆ.''

21'''ಮಕ್ಕಳು ನನಗೆ ವಿರುದ್ಧವಾಗಿ ದಂಗೆ ಎದ್ದರು.
ಅವರು ನನ್ನ ಕಟ್ಟಳೆಗಳನ್ನು ಅನುಸರಿಸಲಿಲ್ಲ. ಅವರು ನನ್ನ
ಆಜ್ಞೆಗಳಿಗೆ ವಿಧೇಯರಾಗಲಿಲ್ಲ. ನಾನು ಹೇಳಿದ್ದನ್ನು
ಅವರು ಮಾಡಲಿಲ್ಲ. ಅವು ಒಳ್ಳೆಯ ಕಟ್ಟಳೆಗಳಾಗಿದ್ದವು.
ಅವುಗಳಿಗೆ ವಿಧೇಯರಾಗುವವರು ಜೀವಿಸುವರು.
ಅವರು ನನ್ನ ವಿಶ್ರಾಂತಿ ದಿವಸಗಳನ್ನು ಆಚರಿಸಲಿಲ್ಲ.
ಆದುದರಿಂದ ಮರುಭೂಮಿಯಲ್ಲಿ ಅವರನ್ನು
ಸಂಪೂರ್ಣವಾಗಿ ನಿರ್ಮೂಲ ಮಾಡಲು ನಿರ್ಧರಿಸಿದೆನು.
ನನ್ನ ಕೋಪದ ತೀಕ್ಷ್ಣತೆಯನ್ನು ಅವರು ತಿಳಿದುಕೊಳ್ಳ
ಬೇಕೆಂದು ತೀರ್ಮಾನಿಸಿದೆನು. 22ಆದರೆ ನಾನು ನನ್ನನ್ನು
ಹಾಗೆ ಮಾಡದಂತೆ ತಡೆದೆನು. ಇಸ್ರೇಲರನ್ನು ಈಜಿಪ್ಟಿ
ನಿಂದ ಹೊರತರುವದನ್ನು ಬೇರೆ ಜನಾಂಗದವರು
ನೋಡಿರುತ್ತಾರೆ. ಆದುದರಿಂದ ನಾನು ಅವರನ್ನು ನಾಶ
ಮಾಡಲಿಲ್ಲ. ನನ್ನ ಹೆಸರಿನ ಘನತೆಯನ್ನು ಉಳಿಸಿ
ಕೊಂಡೆನು. 23ಆಗ ನಾನು ಅಡವಿಯಲ್ಲಿ ಅವರೊಂದಿಗೆ
ಇನ್ನೊಂದು ಮಾತುಕೊಟ್ಟೆನು. ನಾನು ಅವರನ್ನು ನಾನಾ
ದೇಶಗಳಿಗೆ ಚದರಿಸಿಬಿಡುವೆನೆಂದು ಅವರಿಗೆ ತಿಳಿಸಿದೆನು.

24'''ಇಸ್ರೇಲ್ ಜನರು ನನ್ನ ಆಜ್ಞೆಗಳಿಗೆ ವಿಧೇಯ
ರಾಗಲಿಲ್ಲ. ನನ್ನ ಕಟ್ಟಳೆಗಳಿಗೆ ವಿಧೇಯರಾಗಲು ನಿರಾಕರಿ
ಸಿದರು. ನಾನು ನೇಮಿಸಿದ ವಿಶ್ರಾಂತಿ ದಿವಸಗಳನ್ನು
ಅಲಕ್ಷ್ಯಮಾಡಿದರು. ಮತ್ತು ಅವರ ಪೂರ್ವಿಕರ ಹೊಲಸು
ವಿಗ್ರಹಗಳನ್ನು ಪೂಜಿಸಿದರು. 25ಆಗ ನಾನು ಅವರಿಗೆ
ಒಳ್ಳೆಯದಲ್ಲದ ಕಟ್ಟಳೆಗಳನ್ನು ಕೊಟ್ಟೆನು. ಜೀವವನ್ನು
ಕೊಡಲು ಅಸಾಧ್ಯವಾದ ನಿಯಮಗಳನ್ನು ವಿಧಿಸಿದೆನು.
26ಅವರು ತಮ್ಮ ಕಾಣಿಕೆಗಳಿಂದ ತಮ್ಮನ್ನೇ ಹೊಲಸು
ಮಾಡಿಕೊಳ್ಳಲು ಅವರನ್ನು ಬಿಟ್ಟುಕೊಟ್ಟೆನು. ಅವರು
ತಮ್ಮ ವಿಗ್ರಹಗಳಿಗೆ ತಮ್ಮ ಸ್ವಂತ ಚೊಚ್ಚಲು ಗಂಡು
ಮಕ್ಕಳನ್ನು ಆಹುತಿ ಕೊಡಲು ಪ್ರಾರಂಭಿಸಿದರು. ಈ
ರೀತಿಯಾಗಿ ನಾನು ಆ ಜನರನ್ನು ನಾಶಮಾಡುವೆನು. ಆಗ
ಅವರು ನಾನು ಒಡೆಯನಾದ ಯೆಹೋವನೆಂದು ತಿಳಿದು
ಕೊಳ್ಳುವರು.' 27ಆದುದರಿಂದ ನರಪುತ್ರನೇ, ಇಸ್ರೇಲ್
ಜನಾಂಗದವರೊಂದಿಗೆ ಮಾತನಾಡು. ನನ್ನ ಒಡೆಯ
ನಾದ ಯೆಹೋವನು ಇಂತೆನ್ನುತ್ತಾನೆ: 'ನಿಮ್ಮ ಪೂರ್ವಿ
ಕರು ನನಗೆ ಅಪಮಾನ ಮಾಡಿದರು ಮತ್ತು ದ್ರೋಹ
ಮಾಡಿದರು. 28ನಾನು ಅವರಿಗೆ ಕೊಡುವುದಾಗಿ ವಾಗ್ದಾನ
ಮಾಡಿದ್ದ ದೇಶಕ್ಕೆ ಅವರನ್ನು ಕರೆದುಕೊಂಡು ಬಂದೆನು.
ಆದರೆ ಎತ್ತರವಾದ ಬೆಟ್ಟವನ್ನಾಗಲೀ, ಎಲೆಗಳುಳ್ಳ ಮರವ
ನ್ನಾಗಲೀ ಅವರು ಕಂಡಾಗಲೆಲ್ಲಾ ಅವರು ಅಲ್ಲಿಗೆ
ಹೋದರು ಮತ್ತು ವಿಗ್ರಹಗಳನ್ನು ಪೂಜಿಸಿದರು. ಅಲ್ಲಿ
ಅವರು ಯಜ್ಞಗಳನ್ನೂ ನನ್ನನ್ನು ಕೋಪಗೊಳಿಸುವ
ಕಾಣಿಕೆಗಳನ್ನೂ ಧೂಪವನ್ನೂ ಮತ್ತು ಪಾನ ದವ್ಯಾರ್ಪಣೆ
ಗಳನ್ನೂ ಅರ್ಪಿಸಿದರು. 29ನಾನು ಇಸ್ರೇಲರಿಗೆ, ''ನೀವು
ಎತ್ತರದಲ್ಲಿರುವ ಪೂಜಾಸ್ಥಳಗಳಿಗೆ ಯಾಕೆ ಹೋಗು
ತ್ತೀರಿ?'' ಎಂದು ಪ್ರಶ್ನಿಸಿದೆನು. ಆ ಪೂಜಾಸ್ಥಳಗಳು
ಇಂದಿಗೂ ''ಎತ್ತರವಾದ ಸ್ಥಳ'' ಎಂದು ಕರೆಯಲ್ಪಡು
ತ್ತಿವೆ. ಈಗಲೂ ಆ ಪೂಜಾ ಸ್ಥಳಗಳು ಅಲ್ಲಿವೆ.'

30ದೇವರು ಹೇಳಿದ್ದೇನೆಂದರೆ, ''ಇಸ್ರೇಲ್ ಜನರು
ದುಷ್ಟಕಾರ್ಯಗಳನ್ನು ಮಾಡಿದ್ದಾರೆ. ಆದುದರಿಂದ
ನೀನು ಹೋಗಿ ಅವರಿಗೆ ಹೇಳು: 'ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ: ನಿಮ್ಮ ಪೂರ್ವಿಕರು
ಮಾಡಿದಂತೆಯೇ ನೀವು ನಿಮ್ಮನ್ನು ಅಪವಿತ್ರರನ್ನಾಗಿ
ಮಾಡಿಕೊಳ್ಳುತ್ತಿದ್ದೀರಿ. ನೀವು ಸೂಳೆಯರ ಹಾಗೆ
ವರ್ತಿಸಿರುತ್ತೀರಿ. ನಿಮ್ಮ ಪೂರ್ವಿಕರು ಪೂಜಿಸಿದ ಆ
ಭಯಂಕರವಾದ ವಿಗ್ರಹಗಳೊಂದಿಗೆ ಇರುವದಕ್ಕಾಗಿ
ನನ್ನನ್ನು ನೀವು ತೊರೆದುಬಿಟ್ಟರಿ. 31ನೀವು ಅವುಗಳಿಗೆ
ಅದೇ ರೀತಿಯ ಕಾಣಿಕೆಗಳನ್ನರ್ಪಿಸುತ್ತೀರಿ. ಆ ಸುಳ್ಳು
ದೇವರುಗಳಿಗೆ ನೀವು ನಿಮ್ಮ ಮಕ್ಕಳನ್ನು ಬೆಂಕಿಯು
ಮೂಲಕ ಆಹುತಿ ಮಾಡುತ್ತೀರಿ. ಈ ಹೊತ್ತಿನ ದಿನದ
ತನಕವೂ ಆ ಹೊಲಸು ವಿಗ್ರಹಗಳ ತರಹ ನೀವು ನಿಮ್ಮನ್ನು
ಅಶುದ್ಧಪಡಿಸಿಕೊಳ್ಳುತ್ತಿದ್ದೀರಿ. ನೀವು ನನ್ನ ಬಳಿಗೆ ಬಂದು
ನನ್ನ ಸಲಹೆಗಳನ್ನು ಕೇಳಲು ನಿಮ್ಮನ್ನು ನಾನು ಸ್ವಾಗತಿಸ
ಬೇಕೋ? ನಾನು ಒಡೆಯನಾದ ಯೆಹೋವನು. ನನ್ನ
ಜೀವದಾಣೆ, ನಾನು ನಿಮಗೆ ಉತ್ತರಿಸುವದಿಲ್ಲ; ನಿಮಗೆ
ಸಲಹೆಗಳನ್ನೂ ಕೊಡುವದಿಲ್ಲ. 32ನಾವು ಮರದ ಮತ್ತು
ಕಲ್ಲಿನ ವಸ್ತುಗಳನ್ನು ಪೂಜಿಸುತ್ತಾ ಇತರ ಜನಾಂಗಗಳಂತೆ
ಇರೋಣ'' ಎಂದು ನೀವು ಯೋಚಿಸುತ್ತಲೇ ಇರುತ್ತೀರಿ.
ನಿಮ್ಮ ಮನಸ್ಸುಗಳಲ್ಲಿರುವ ಈ ಆಲೋಚನೆಯು
ಎಂದಿಗೂ ನೆರವೇರುವದಿಲ್ಲ.'''

33ನನ್ನ ಒಡೆಯನಾದ ಯೆಹೋವನು ಹೇಳುತ್ತಾನೆ,
''ನನ್ನ ಜೀವದಾಣೆ, ನಾನು ರಾಜನಾಗಿ ನಿಮ್ಮ ಮೇಲೆ
ದೊರೆತನ ಮಾಡುವೆನೆಂದು ಪ್ರಮಾಣ ಮಾಡುತ್ತೇನೆ.
ನಾನು ನನ್ನ ಬಲವಾದ ಕೈಯನ್ನು ಮತ್ತು ಶಕ್ತಿಯುತವಾದ
ತೋಳನ್ನು ಮೇಲೆತ್ತಿ ನಿಮ್ಮನ್ನು ದಂಡಿಸುವೆನು. ನಿಮ್ಮ
ವಿರುದ್ಧವಾಗಿ ನನ್ನ ಕೋಪವನ್ನು ತೋರ್ಪಡಿಸುವೆನು.
34ಪರದೇಶಗಳಿಂದ ನಾನು ನಿಮ್ಮನ್ನು ಹೊರತರುವೆನು.
ನಾನು ಆ ದೇಶಗಳಲ್ಲಿ ನಿಮ್ಮನ್ನು ಚದರಿಸಿದೆನು. ಆದರೆ
ಆ ದೇಶಗಳಿಂದ ನಾನು ನಿಮ್ಮನ್ನು ಒಟ್ಟುಗೂಡಿಸಿ ಹಿಂದಕ್ಕೆ
ಬರಮಾಡುವೆನು. ನನ್ನ ಬಲವಾದ ಕೈಯನ್ನು ಮತ್ತು

ಶಕ್ತಿಯುತವಾದ ತೋಳನ್ನು ಮೇಲೆತ್ತಿ ನಿಮ್ಮನ್ನು ಶಿಕ್ಷಿಸಿ
ನನ್ನ ಕೋಪವನ್ನು ಪ್ರದರ್ಶಿಸುವೆನು. 35ನಾನು ಹಿಂದಿನ
ಕಾಲದಲ್ಲಿ ಮಾಡಿದಂತೆ ಮರುಭೂಮಿಗೆ ನಿಮ್ಮನ್ನು
ನಡೆಸುವೆನು. ಆದರೆ ಇದು ಅನ್ಯಜನಾಂಗಗಳು ವಾಸಿಸುವ
ಸ್ಥಳದಲ್ಲಿರುವುದು ಮತ್ತು ನಾನು ಎದುರುಬದುರಾಗಿ
ನಿಂತು ನಿಮಗೆ ನ್ಯಾಯತೀರಿಸುವೆನು. 36ನಾನು ಈಜಿಪ್ಟಿನ
ಮರುಭೂಮಿಯಲ್ಲಿ ನಿಮ್ಮ ಪೂರ್ವಿಕರನ್ನು ದಂಡಿಸಿ
ದಂತೆ ನಿಮ್ಮನ್ನೂ ದಂಡಿಸುವೆನು.’’ ನನ್ನ ಒಡೆಯನಾದ
ಯೆಹೋವನು ಇವುಗಳನ್ನು ಹೇಳಿದನು.

37‘‘ನಾನು ನಿಮ್ಮ ನ್ಯಾಯವಿಚಾರಣೆ ಮಾಡಿ ನೀವು
ಮಾಡಿದ ತಪ್ಪುಗಳಿಗೆ ನಮ್ಮ ಒಡಂಬಡಿಕೆಯ ಪ್ರಕಾರ
ನಿಮ್ಮನ್ನು ಶಿಕ್ಷಿಸುವೆನು. 38ನನಗೆ ವಿರೋಧವಾಗಿ ಎದ್ದು
ಪಾಪಮಾಡಿದ ಜನರನ್ನು ಅವರ ಸ್ವದೇಶದಿಂದ ತೆಗೆದು
ಬಿಡುವೆನು. ಅವರು ಇನ್ನೆಂದಿಗೂ ಇಸ್ರೇಲ್ ದೇಶಕ್ಕೆ
ಹಿಂತಿರುಗಿ ಬರುವುದೇ ಇಲ್ಲ. ನಾನೇ ಯೆಹೋವ
ನೆಂಬುದು ಆಗ ನಿಮಗೆ ತಿಳಿಯುವುದು.’’

39ಇಸ್ರೇಲ್ ಜನರೇ, ನನ್ನ ಒಡೆಯನಾದ ಯೆಹೋ
ವನು ಇಂತೆನ್ನುತ್ತಾನೆ: ‘‘ಆ ಹೊಲಸು ವಿಗ್ರಹಗಳನ್ನು
ಆರಾಧಿಸಬೇಕೆನ್ನುವವನು ಹೋಗಿ ಆರಾಧಿಸಲಿ.
ಮುಂದಿನ ಕಾಲದಲ್ಲಂತೂ ನೀವು ನನ್ನ ಬುದ್ಧಿಮಾತನ್ನು
ಕೇಳೇ ಕೇಳುವಿರಿ. ನನ್ನ ಪರಿಶುದ್ಧ ಹೆಸರನ್ನು ನೀವು ನಿಮ್ಮ
ಬಲಿಗಳಿಂದಲೂ ಬೊಂಬೆಗಳಿಂದಲೂ ಅಪಕೀರ್ತಿಗೆ
ಗುರಿಮಾಡುವುದೇ ಇಲ್ಲ.’’

40ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ‘‘ಇಸ್ರೇಲಿನ ಎತ್ತರವಾದ ನನ್ನ ಪವಿತ್ರಪರ್ವತಕ್ಕೆ
ಜನರು ಬರಲೇಬೇಕು. ಅಲ್ಲಿ ಅವರು ನನ್ನ ಸೇವೆ
ಮಾಡಲೇಬೇಕು. ಇಡೀ ಇಸ್ರೇಲ್ ಜನಾಂಗವು ತಮ್ಮ
ದೇಶದಲ್ಲಿರುವುದು. ಅಲ್ಲಿ ನಾನು ಅವರನ್ನು ಸ್ವೀಕರಿಸಿ
ಕೊಳ್ಳುವೆನು. ಅಲ್ಲಿ ನೀವು ನಿಮ್ಮ ಕಾಣಿಕೆಗಳನ್ನು ಪ್ರಥಮ
ಫಲಗಳನ್ನು ಮತ್ತು ಎಲ್ಲಾ ಪವಿತ್ರ ಕಾಣಿಕೆಗಳನ್ನು ನನಗೆ
ತರಬೇಕೆಂದು ಅಪೇಕ್ಷಿಸುತ್ತೇನೆ. 41ಆಗ ನಿಮ್ಮ ಕಾಣಿಕೆಯ
ಸುವಾಸನೆಯಿಂದ ಸಂತೋಷಭರಿತನಾಗುವೆನು. ಇದು
ನಿಮ್ಮನ್ನು ಹಿಂದಕ್ಕೆ ನಿಮ್ಮ ದೇಶಕ್ಕೆ ಕರೆತಂದಾಗ ಆಗು
ವದು. ನಾನು ನಿಮ್ಮನ್ನು ಅನೇಕ ದೇಶಗಳಲ್ಲಿ ಚದರಿಸಿ
ದೆನು. ಆದರೆ ನಾನು ನಿಮ್ಮನ್ನು ಒಟ್ಟುಗೂಡಿಸಿ ನಿಮ್ಮ
ಮೂಲಕ ನನ್ನ ಪವಿತ್ರತೆಯನ್ನು ಪ್ರದರ್ಶಿಸುವೆನು. ಆ
ಎಲ್ಲಾ ದೇಶಗಳವರು ಇದನ್ನು ನೋಡುವರು. 42ನಾನು
ನಿಮ್ಮನ್ನು ತಿರುಗಿ ನಿಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿದ
ಇಸ್ರೇಲ್ ದೇಶಕ್ಕೆ ಬರಮಾಡಿದಾಗ ನಾನೇ ಯೆಹೋವ
ನೆಂದು ಅರಿತುಕೊಳ್ಳುವಿರಿ.43ನಿಮ್ಮನ್ನು ನಿಮ್ಮ ದುಷ್ಟತ್ವ
ದಿಂದ ಹೊಲಸು ಮಾಡಿಕೊಂಡದ್ದನ್ನು ಅಲ್ಲಿ ಜ್ಞಾಪಕ
ಮಾಡಿಕೊಳ್ಳುವಿರಿ. ಆಗ ನೀವು ನಾಚಿಕೆಪಡುವಿರಿ.
44ಇಸ್ರೇಲ್ ಜನಾಂಗವೇ, ನೀವು ಅನೇಕ ಕೆಟ್ಟ ವಿಷಯ
ಗಳನ್ನು ಮಾಡಿರುತ್ತೀರಿ. ಆ ದುಷ್ಟಕಾರ್ಯಗಳಿಗಾಗಿ
ನೀವು ನಾಶವಾಗಿ ಹೋಗಬೇಕಾಗಿತ್ತು. ಆದರೆ ನನ್ನ ಒಳ್ಳೇ
ಹೆಸರಿನ ಸಲುವಾಗಿ ನೀವು ಹೊಂದಬೇಕಾದ ಶಿಕ್ಷೆಯನ್ನು
ನಾನು ನಿಮಗೆ ವಿಧಿಸುವದಿಲ್ಲ. ಆಗ ನಾನೇ ಒಡೆಯನಾದ
ಯೆಹೋವನೆಂದು ತಿಳಿದುಕೊಳ್ಳುವಿರಿ.’’ ಇದು ನನ್ನ
ಒಡೆಯನಾದ ಯೆಹೋವನ ನುಡಿ.

45ಯೆಹೋವನ ವಾಕ್ಯವು ನನಗೆ ಬಂದಿತು. ಆತನು
ಹೇಳಿದ್ದೇನೆಂದರೆ, 46‘‘ನರಪುತ್ರನೇ, ಯೆಹೂದದ
ದಕ್ಷಿಣದಲ್ಲಿರುವ ನೆಗೆವ್ ಕಡೆಗೆ ನೋಡು. ನೆಗೆವ್ ಅಡ
ವಿಗೆ ವಿರುದ್ಧವಾಗಿ ಮಾತನಾಡು. 47ನೆಗೆವ್ ಅಡವಿಗೆ
ಹೀಗೆ ಹೇಳು: ‘ಯೆಹೋವನ ಮಾತುಗಳನ್ನು ಆಲೈಸು.
ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘ನಾನು ನಿನ್ನ ಅಡವಿಯಲ್ಲಿ ಬೆಂಕಿಯನ್ನು ಉತ್ಪಾದಿಸು
ತ್ತೇನೆ. ಆ ಬೆಂಕಿಯು ಪ್ರತಿಯೊಂದು ಹಸಿರು ಮರವನ್ನೂ
ಪ್ರತಿ ಯೊಂದು ಒಣಗಿದ ಮರವನ್ನೂ ಸುಟ್ಟುಬಿಡುವದು.
ಆ ಬೆಂಕಿಯನ್ನು ನಂದಿಸಲಾಗುವದಿಲ್ಲ. ದಕ್ಷಿಣದಿಂದ
ಉತ್ತ ರದ ತನಕವಿರುವ ಪ್ರತಿಯೊಂದು ಮುಖವು ಅದರ
ತಾಪ ವನ್ನು ಅನುಭವಿಸುವುದು. 48ಆಗ ಎಲ್ಲಾ ಜನರು
ಯೆಹೋವನಾದ ನಾನೇ ಬೆಂಕಿಯನ್ನಿಟ್ಟಿದ್ದು ಎಂದು
ತಿಳಿದುಕೊಳ್ಳುವರು. ಆ ಬೆಂಕಿಯು ನಂದಿಸಲ್ಪಡುವು
ದಿಲ್ಲ.’’’

49ಆಗ ನಾನು (ಯೆಹೆಜ್ಕೇಲ್), ‘‘ಅಯ್ಯೋ, ನನ್ನ
ಒಡೆಯನಾದ ಯೆಹೋವನೇ, ನಾನು ಇದನ್ನೆಲ್ಲಾ
ಹೇಳಿದರೆ, ನಿಗೂಢವಾದ ಕಥೆಗಳನ್ನು ಹೇಳುತ್ತಿದ್ದೇ
ನೆಂದು ಹೇಳುವರು. ಮತ್ತು ನನಗೆ ಇನ್ನೆಂದಿಗೂ ಕಿವಿ
ಗೊಡುವದಿಲ್ಲ’’ ಎಂದು ಹೇಳಿದೆನು.

21 ಯೆಹೋವನ ಸಂದೇಶ ನನಗೆ ತಿರುಗಿ ಬಂತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ,
ಜೆರುಸಲೇಮಿನ ಕಡೆಗೆ ನೋಡಿ ಅವರ ಪವಿತ್ರ ಸ್ಥಳಗಳಿಗೆ
ವಿರುದ್ಧವಾಗಿ ಹೇಳು. ನನ್ನ ಪರವಾಗಿ ಇಸ್ರೇಲ್ ದೇಶದ
ವಿರುದ್ಧವಾಗಿ ಮಾತನಾಡು. 3ಇಸ್ರೇಲ್ ದೇಶಕ್ಕೆ ಹೀಗೆ
ಹೇಳು: ‘ಯೆಹೋವನು ನನಗೆ ಹೀಗೆಂದಿದ್ದಾನೆ, ನಾನು
ನಿನಗೆ ವಿರೋಧವಾಗಿದ್ದೇನೆ. ನನ್ನ ಖಡ್ಗವನ್ನು ಅದರ
ಒರೆಯಿಂದ ಹೊರತೆಗೆಯುವೆನು. ನಿನ್ನಲ್ಲಿರುವ ಒಳ್ಳೆಯ
ಜನರನ್ನೂ, ಕೆಟ್ಟ ಜನರನ್ನೂ ತೆಗೆದುಬಿಡುವೆನು.
4ಒಳ್ಳೆಯ ಜನರನ್ನೂ ಕೆಟ್ಟ ಜನರನ್ನೂ ನಿನ್ನಿಂದ ಕಡಿದು
ಹಾಕುವೆನು. ನನ್ನ ಖಡ್ಗವನ್ನು ಒರೆಯಿಂದ ತೆಗೆದು ದಕ್ಷಿಣ
ದಿಂದ ಉತ್ತರದ ತನಕ ಇರುವ ಎಲ್ಲಾ ಜನರಿಗೆ ವಿರುದ್ಧ
ವಾಗಿ ಉಪಯೋಗಿಸುವೆನು. 5ಆಗ, ಯೆಹೋವನಾದ
ನಾನೇ ನನ್ನ ಖಡ್ಗವನ್ನು ಒರೆಯಿಂದ ತೆಗೆದಿದ್ದೇನೆಂದು
ಎಲ್ಲಾ ಜನರಿಗೆ ಗೊತ್ತಾಗುವುದು. ನನ್ನ ಖಡ್ಗವು ತನ್ನ

ಕಾರ್ಯ ಮಾಡದೆ ತಿರುಗಿ ಒರೆಯೊಳಗೆ ಹೋಗುವದಿಲ್ಲ.''

[6]ದೇವರು ನನಗೆ ಹೇಳಿದ್ದೇನೆಂದರೆ, ''ನರಪುತ್ರನೇ, ಹೃದಯ ಒಡೆದ ಮನುಷ್ಯನು ದುಃಖದಿಂದಿರುವಾಗ ಅಳುವ ಶಬ್ದವನ್ನು ಮಾಡು. ಈ ಶಬ್ದವನ್ನು ಜನರ ಮುಂದೆ ಮಾಡು. [7]ಆಗ ಅವರು, 'ನೀನು ದುಃಖದಿಂದ ಅಳುವದೇಕೆ?' ಎಂದು ವಿಚಾರಿಸುವರು. ಆಗ ನೀನು ಹೀಗೆ ಹೇಳಬೇಕು: 'ಭೀತಿಯನ್ನುಂಟು ಮಾಡುವ ವಾರ್ತೆ ಬರುವದರಿಂದ ಎಲ್ಲರ ಹೃದಯಗಳು ಭಯದಿಂದ ಕರಗಿ ಹೋಗಿರುತ್ತವೆ; ಕೈಗಳು ಬಲಹೀನವಾಗುತ್ತಿವೆ. ಪ್ರತಿ ಮನುಷ್ಯನ ಆತ್ಮವು ಕೃಶವಾಗುವುದು. ಮೊಣ ಗಂಟುಗಳು ನೀರಿನಂತಿರುವವು.' ನೋಡಿ, ಆ ಕೆಟ್ಟ ಸುದ್ದಿಯು ಬರುತ್ತಲಿದೆ. ಇವೆಲ್ಲಾ ನಡೆಯುವವು.'' ನನ್ನ ಒಡೆಯನಾದ ಯೆಹೋವನು ಇದನ್ನು ಹೇಳಿದನು.

## ಖಡ್ಗವು ತಯಾರಿದೆ

[8]ಯೆಹೋವನ ನುಡಿ ನನಗೆ ಬಂತು. ಆತನು ಹೇಳಿದ್ದೇನೆಂದರೆ, [9]ನರಪುತ್ರನೇ, ನನ್ನ ಪರವಾಗಿ ಜನರೊಂದಿಗೆ ಮಾತನಾಡು. ಅವರಿಗೆ ಹೀಗೆ ಹೇಳು: 'ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:

'''ನೋಡು, ಒಂದು ಖಡ್ಗ, ಹರಿತವಾದ ಖಡ್ಗ, ಆ
ಖಡ್ಗವು ತಿಕ್ಕಿ ಶುಭ್ರ ಮಾಡಲ್ಪಟ್ಟಿದೆ,
10 ಕೊಲ್ಲುವದಕ್ಕಾಗಿ ಆ ಖಡ್ಗವು ಹರಿತ ಮಾಡಲ್ಪಟ್ಟಿದೆ. ಮಿಂಚಿನಂತೆ ಹೊಳೆಯುತ್ತಿದೆ.
'''ನನ್ನ ಮಗನೇ, ನಾನು ನಿನ್ನನ್ನು ಶಿಕ್ಷಿಸುತ್ತಿದ್ದ ಬೆತ್ತದಿಂದ ನೀನು ಓಡಿಹೋದೆ. ಬೆತ್ತದ ಶಿಕ್ಷೆಯನ್ನು ಅನುಭವಿಸಲು ನೀನು ಒಪ್ಪಲಿಲ್ಲ.
11 ಈಗ ಖಡ್ಗವು ಹರಿತ ಮಾಡಲ್ಪಟ್ಟಿದೆ. ಅದು ಈಗ ಉಪಯೋಗಿಸಲ್ಪಡುತ್ತದೆ. ಖಡ್ಗವು ಹದಮಾಡಲ್ಪಟ್ಟು ಚೆನ್ನಾಗಿ ಉಜ್ಜಿ ಹೊಳೆಯುತ್ತಿದೆ. ಅದನ್ನು ಈಗ ಕೊಲ್ಲುವವನ ಕೈಯಲ್ಲಿ ಕೊಡಲಾಗುವುದು.

[12]'''ಬೊಬ್ಬೆಹಾಕು, ಕಿರುಚು, ಓ ನರಪುತ್ರನೇ, ಯಾಕೆಂದರೆ ಖಡ್ಗವು ನನ್ನ ಜನರ ಮೇಲೆ ಮತ್ತು ಇಸ್ರೇಲಿನ ಎಲ್ಲಾ ಅಧಿಪತಿಗಳ ಮೇಲೆ ಉಪಯೋಗಿಸಲ್ಪಡುವುದು. ಇಸ್ರೇಲನ್ನು ಆಳುವವರಿಗೆ ಯುದ್ಧವು ಬೇಕು. ಆಗ ಅವರು ಖಡ್ಗವು ಬಂದಾಗ ನನ್ನ ಜನರೊಂದಿಗೆ ಇರಬಹುದು. ಆದುದರಿಂದ ನಿನ್ನ ತೊಡೆಗೆ ಬಡಿದು ಗಟ್ಟಿಯಾದ ಸ್ವರದಿಂದ ನಿನ್ನ ದುಃಖವನ್ನು ಪ್ರದರ್ಶಿಸು. [13]ನೀನು ಬೆತ್ತದ ಶಿಕ್ಷೆ ಅನುಭವಿಸಲು ನಿರಾಕರಿಸಿದಿ. ಹಾಗಾದರೆ ನಾನು ನಿನಗೆ ಏನು ಉಪಯೋಗಿಸಬೇಕು? ಹೌದು, ಖಡ್ಗವೇ,''' ನನ್ನ ಒಡೆಯನಾದ ಯೆಹೋವನು ನುಡಿದಿದ್ದಾನೆ.

[14]ಆತನು ಹೀಗೆ ಹೇಳಿದನು: ''ನರಪುತ್ರನೇ, ಕೈತಟ್ಟಿ ನನ್ನ ಪರವಾಗಿ ಜನರೊಂದಿಗೆ ಮಾತನಾಡು.

''ಖಡ್ಗವು ಎರಡು ಬಾರಿ ಕೆಳಕ್ಕೆ ಹಾಕಲ್ಪಡಲಿ, ಹೌದು, ಮೂರು ಬಾರಿ! ಈ ಖಡ್ಗವು ಜನರನ್ನು ಕೊಲ್ಲುವದಕ್ಕಾಗಿಯೇ ಇದೆ. ಇದು ಮಹಾ ಹತ್ಯೆ ಮಾಡುವದಕ್ಕಾಗಿ ಇದೆ. ಈ ಖಡ್ಗವು ಅವರನ್ನು ತೂರಿ ಹೋಗುವದು.
15 ಅವರ ಹೃದಯಗಳು ಭಯದಿಂದ ಕರಗಿ ಹೋಗುವದು. ಬಹು ಜನರು ಪ್ರಜ್ಞೆ ತಪ್ಪಿ ಬೀಳುವರು. ನಗರ ದ್ವಾರ ಬಳಿಯಲ್ಲಿದ್ದು ಈ ಖಡ್ಗವು ಬಹು ಜನರನ್ನು ಕೊಲ್ಲುವುದು. ಹೌದು, ಖಡ್ಗವು ಮಿಂಚಿನಂತೆ ಹೊಳೆಯುವುದು. ಜನರನ್ನು ಕೊಲ್ಲುವದಕ್ಕಾಗಿ ಅದು ಹೊಳಪು ಮಾಡಲ್ಪಟ್ಟಿದೆ.
16 ಖಡ್ಗವೇ, ಹರಿತವಾಗು, ಬಲದ ಸ್ಥಳದಲ್ಲಿ ತುಂಡರಿಸು; ನೇರವಾಗಿ ತೂರು. ಎಡದ ಸ್ಥಳದಲ್ಲಿ ತುಂಡರಿಸು. ನಿನ್ನ ಖಡ್ಗವು ಯಾವ ಸ್ಥಳಕ್ಕೆ ನುಗ್ಗಬೇಕೆಂದಿದೆಯೋ ಆ ಸ್ಥಳಕ್ಕೆ ಹೋಗು.
17 ಆಗ ನಾನೂ ಚಪ್ಪಾಳೆ ಹೊಡೆಯುವೆನು. ಆಗ ನಾನು ನನ್ನ ಕೋಪವನ್ನು ನಿಲ್ಲಿಸುವೆನು. ಯೆಹೋವನಾದ ನಾನು ಇದನ್ನು ನುಡಿದಿದ್ದೇನೆ.''

## ಜೆರುಸಲೇಮಿಗೆ ಹೋಗುವ ದಾರಿಯನ್ನು ಆರಿಸುವಿಕೆ

[18]ಯೆಹೋವನ ಸಂದೇಶ ನನಗೆ ಬಂದಿತು. ಆತನು ಹೀಗೆ ಹೇಳಿದನು: [19]''ನರಪುತ್ರನೇ, ಬಾಬಿಲೋನಿನ ರಾಜನ ಖಡ್ಗವು ಇಸ್ರೇಲರಿಗೆ ಬರಲು ಎರಡು ಮಾರ್ಗಗಳ ನಕ್ಷೆಯನ್ನು ರಚಿಸು. ಅವರೆಡೂ ಒಂದೇ ಪ್ರದೇಶದಿಂದ (ಬಾಬಿಲೋನಿನಿಂದ) ಆರಂಭವಾಗುತ್ತವೆ. ಪ್ರತಿಯೊಂದು ರಸ್ತೆಯ ಆರಂಭದಲ್ಲಿ ಸೂಚನೆ ಕಂಬವನ್ನು ಚಿತ್ರಿಸು. [20]ಯಾವ ಮಾರ್ಗದಲ್ಲಿ ಖಡ್ಗವು ಬರುವದೋ ಆ ದಾರಿಯನ್ನು ಗುರುತಿಸು. ಒಂದು ರಸ್ತೆಯು ಅಮ್ಮೋನಿಯರ ನಗರವಾದ ರಬ್ಬಾಗೆ ಹೋಗುವದು. ಇನ್ನೊಂದು ಮಾರ್ಗವು ಯೆಹೂದದಲ್ಲಿರುವ ಭದ್ರಪಡಿಸಲ್ಪಟ್ಟ ಪಟ್ಟಣವಾಗಿರುವ ಜೆರುಸಲೇಮಿಗೆ ಹೋಗುವುದು. [21]ಇದರ ಅರ್ಥವೇನೆಂದರೆ, ರಸ್ತೆಯು ಶಾಖೆಗಳಾಗಿ ಒಡೆಯುವ ಸ್ಥಳದಲ್ಲಿ ಬಾಬಿಲೋನಿನ ರಾಜನು ಶಕುನವನ್ನು ಕೇಳಲು ನಿಂತಿದ್ದಾನೆ. ಅವನು ಕೆಲವು ಬಾಣಗಳನ್ನು ಅಲುಗಾಡಿಸಿದ್ದಾನೆ. ಅವನು ಕೆಲವು ಬಾಣಗಳನ್ನು ಚದರಿಸಿ, ತನ್ನ ವಂಶದ ವಿಗ್ರಹಗಳಿಗೆ ಕೆಲವು ಪ್ರಶ್ನೆಗಳನ್ನು ಕೇಳಿದನು. ಮತ್ತು ತಾನು ಕೊಂದ ಪ್ರಾಣಿಯ ಕಾಳಿಜವನ್ನು ನೋಡಿದನು.

22‘‘ಜೆರುಸಲೇಮನ್ನು ಸೂಚಿಸುವ ಮಂತ್ರಶಕ್ತಿಯ
ವಸ್ತು ಅವನ ಬಲಗೈಗೆ ಬರುವುದು. ಅವನ ತನ್ನೊಂದಿಗೆ
ಭಿತ್ತಿಬೇಧಕ ಯಂತ್ರಗಳನ್ನು ತರುವನು. ಅವನು ಅಪ್ಪಣೆ
ಮಾಡಿದ ಕೂಡಲೇ ಅವನ ಸೈನಿಕರು ಕೊಲ್ಲಲು
ಪ್ರಾರಂಭಿಸುವರು. ರಣರಂಗದ ಆರ್ಭಟ ಮಾಡುವರು.
ಆಮೇಲೆ ನಗರದ ಸುತ್ತಲೂ ಮಣ್ಣಿನ ದಿಬ್ಬ ಕಟ್ಟುವರು.
ಕೋಟೆಗೋಡೆಯ ತನಕ ಮಣ್ಣಿನ ರಸ್ತೆ ಮಾಡುವರು.
ಮರದಿಂದ ಮಾಡಿದ ಗೋಪುರಗಳನ್ನು ಮಾಡಿ ಅಲ್ಲಿಂದ
ನಗರಕ್ಕೆ ಧಾಳಿ ಮಾಡುವರು. 23ಇಸ್ರೇಲ್ ಜನರಿಗೆ ಆ
ಮಂತ್ರತಂತ್ರಗಳ ಗುರುತು ಅರ್ಥವಿಲ್ಲದ್ದಾಗಿದೆ. ಅವರು
ಮಾಡಿದ ವಾಗ್ದಾನವು ಅವರೊಂದಿಗಿದೆ. ಆದರೆ ಯೆಹೋ
ವನು ಅವರ ಪಾಪಗಳನ್ನು ನೆನಪಿಗೆ ತರುವನು. ಆಗ
ಇಸ್ರೇಲರು ಶತ್ರುವಶವಾಗುವರು.’’

24ನನ್ನ ಒಡೆಯನಾದ ಯೆಹೋವನು ಹೀಗೆನ್ನುತ್ತಾನೆ:
‘‘ನೀನು ಅನೇಕ ದುಷ್ಟಕೃತ್ಯಗಳನ್ನು ಮಾಡಿರುತ್ತೀ. ನಿನ್ನ
ಪಾಪಗಳು ಬಹಳ ಸ್ಪಷ್ಟವಾಗಿವೆ. ನೀನು ದೋಷಿ ಎಂಬು
ದನ್ನು ನಾನು ನೆನಪು ಮಾಡಿಕೊಳ್ಳುವಂತೆ ಮಾಡುತ್ತೀ.
ವೈರಿಯು ನಿನ್ನನ್ನು ಹಿಡಿಯುವನು. 25ಇಸ್ರೇಲಿನ ದುಷ್ಟ
ಅಧಿಪತಿಯೇ, ನೀನು ಸಾಯುವಿ. ನಿನಗೆ ನನ್ನ ಶಿಕ್ಷೆಯು
ಬಂದಾಯಿತು. ನಿನ್ನ ಅಂತ್ಯವು ಹತ್ತಿರವೇ ಇದೆ’’

26ನನ್ನ ಒಡೆಯನಾದ ಯೆಹೋವನು ಹೀಗೆನ್ನುತ್ತಾನೆ:
‘‘ನಿನ್ನ ಮುಂಡಾಸವನ್ನು ತೆಗೆ! ನಿನ್ನ ಕಿರೀಟವನ್ನು ತೆಗೆ!
ಈಗ ಇರುವಂತೆಯೇ ಸಂಗತಿಗಳು ಇರುವುದಿಲ್ಲ.
ಮುಖ್ಯಾಧಿಕಾರಿಗಳು ತಗ್ಗಿಸಲ್ಪಡುವರು. ಈಗ ಸಾಧಾರಣ
ವ್ಯಕ್ತಿಗಳಾಗಿರುವವರು ಪ್ರಮುಖ ನಾಯಕರುಗಳಾಗು
ವರು. 27ನಾನು ಆ ನಗರವನ್ನು ಸಂಪೂರ್ಣವಾಗಿ ನಾಶ
ಮಾಡುವೆನು ಆದರೆ ನಾನು ನೇಮಿಸಿದ ವ್ಯಕ್ತಿಯು
ರಾಜನಾಗುವ ತನಕ ಇದು ಸಂಭವಿಸುವುದಿಲ್ಲ: ಅವನು
ರಾಜನಾದ ಮೇಲೆ ಈ ಪಟ್ಟಣವನ್ನು ಅವನಿ
ಗೊಪ್ಪಿಸುವೆನು.’’

## ಅಮ್ಮೋನಿನ ವಿರುದ್ಧ ಪ್ರವಾದನೆ

28ದೇವರು ಹೇಳಿದ್ದು, ‘‘ನರಪುತ್ರನೇ, ನನ್ನ ಪರವಾಗಿ
ಜನರ ಕೂಡ ಮಾತನಾಡು. ‘ನನ್ನ ಒಡೆಯನಾದ
ಯೆಹೋವನು ಅಮ್ಮೋನಿಯರ ಬಗ್ಗೆಯೂ ಅವರ
ದೂಷಣೆಗಳ ಬಗ್ಗೆಯೂ ಹೀಗೆ ಹೇಳುತ್ತಾನೆ:

‘‘‘ನೋಡು, ಒಂದು ಖಡ್ಗ. ಆ ಖಡ್ಗವು ಒರೆಯಿಂದ
ಹೊರ ಬಂದಿದೆ. ಆ ಖಡ್ಗವನ್ನು ಹರಿತಗೊಳಿಸ
ಲಾಗಿದೆ ಮತ್ತು ನಯಗೊಳಿಸಲಾಗಿದೆ. ಖಡ್ಗವು
ಕೊಲ್ಲಲು ಸಿದ್ಧವಾಗಿದೆ. ಮಿಂಚಿನಂತೆ ಹೊಳೆಯ
ಲೆಂದು ಅದನ್ನು ನಯಗೊಳಿಸಲಾಗಿದೆ.

29 ಓ ಖಡ್ಗವೇ, ನಿನ್ನ ಕುರಿತು ಅವರು ಸುಳ್ಳು ದರ್ಶನ
ಗಳನ್ನು ಕಾಣುವರು. ನಿನ್ನ ಕುರಿತು ಅವರು
ಹೇಳುವ ಕಣಿಯು ದಾರಿತಪ್ಪಿಸುತ್ತದೆ. ಅದು ಬರೇ
ಸುಳ್ಳುಗಳ ಕಂತೆ. ಓ ಖಡ್ಗವೇ, ನಿನ್ನನ್ನು ದುಷ್ಟರ
ಕುತ್ತಿಗೆಗಳ ಮೇಲೆ ಇರಿಸಲಾಗುವುದು. ಬೇಗನೇ
ಅವರು ಹೆಣಗಳಾಗಿ ಬೀಳುವರು. ಅವರ ಸಮ
ಯವು ಬಂದಿದೆ. ಇದು ಅವರ ಅಂತ್ಯ ದಂಡನೆಯ
ಸಮಯವಾಗಿದೆ.

## ಬಾಬಿಲೋನ್ ವಿರುದ್ಧ ಪ್ರವಾದನೆ

30‘‘‘ಬಾಬಿಲೋನ್, ನಿನ್ನ ಖಡ್ಗವನ್ನು, ಒರೆಯಲ್ಲಿ
ಹಾಕು. ನೀನು ಎಲ್ಲಿ ನಿರ್ಮಿಸಲ್ಪಟ್ಟಿದ್ದೆಯೋ, ಎಲ್ಲಿ ನೀನು
ಜನ್ಮತಾಳಿದೆಯೋ ಅಲ್ಲಿ ನಿನ್ನ ನ್ಯಾಯ ತೀರಿಸುವೆನು.
31ನಿನ್ನ ಮೇಲೆ ನನ್ನ ರೌದ್ರವನ್ನು ಸುರಿಸುವೆನು. ನನ್ನ
ರೌದ್ರವು ಬಿಸಿ ಗಾಳಿಯಂತೆ ನಿನ್ನನ್ನು ಸುಡುವದು. ನಾನು
ನಿನ್ನನ್ನು ಕ್ರೂರ ಮನುಷ್ಯರ ಕೈಗೆ ಒಪ್ಪಿಸುವೆನು. ಅವರು
ಜನರನ್ನು ಕೊಲ್ಲುವುದರಲ್ಲಿ ನಿಪುಣರು. 32ನೀನು ಬೆಂಕಿಗೆ
ಸೌದೆಯಂತೆ ಇರುವಿ. ನಿನ್ನ ರಕ್ತವು ಭೂಮಿಯ ಆಳಕ್ಕೆ
ಹರಿಯುವದು. ಜನರು ಇನ್ನು ಮುಂದಕ್ಕೆ ನಿನ್ನನ್ನು
ಎಂದಿಗೂ ನೆನಪು ಮಾಡರು. ಇದನ್ನು ಯೆಹೋವನಾದ
ನಾನೇ ಹೇಳಿದ್ದೇನೆ.’’’

## ಜೆರುಸಲೇಮಿನ ವಿರುದ್ಧವಾಗಿ ಯೆಹೆಜ್ಕೇಲನ ಮಾತುಗಳು

22 ಯೆಹೋವನ ಸಂದೇಶವು ನನಗೆ ಬಂತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ,
ನೀನು ಹಂತಕರ ನಗರಕ್ಕೆ ನ್ಯಾಯ ತೀರಿಸುವೆಯಾ?
ಆಕೆಯ ಭಯಂಕರ ದುಷ್ಟತನದ ಬಗ್ಗೆ ಆಕೆಗೆ ತಿಳಿಸು.
3ನೀನು ಹೀಗೆ ಹೇಳಬೇಕು: ‘ನನ್ನ ಒಡೆಯನಾದ
ಯೆಹೋವನ ಮಾತುಗಳಿವು. ‘ಈ ನಗರವು ಕೊಲೆಗಾರ
ರಿಂದ ತುಂಬಿದೆ. ಆದುದರಿಂದ ಆಕೆಯ ಶಿಕ್ಷೆಯ ದಿನವು
ಬಂದಿದೆ. ಆಕೆ ತನಗೋಸ್ಕರ ಹೊಲಸು ವಿಗ್ರಹಗಳನ್ನು
ಮಾಡಿ ತನ್ನನ್ನು ಹೊಲಸು ಮಾಡಿಕೊಂಡಿದ್ದಾಳೆ.

4‘‘ಜೆರುಸಲೇಮಿನ ನಿವಾಸಿಗಳೇ, ನೀವು ಅನೇಕರನ್ನು
ಕೊಂದಿದ್ದೀರಿ. ಆದ್ದರಿಂದ ನೀವು ದೋಷಿಗಳು. ನೀವು
ಹೊಲಸು ವಿಗ್ರಹಗಳನ್ನು ಮಾಡಿಕೊಂಡಿದ್ದೀರಿ. ಆದುದ
ರಿಂದ ನೀವು ಅಶುದ್ಧರು. ನಿಮ್ಮನ್ನು ಶಿಕ್ಷಿಸುವ ಸಮಯ
ಈಗ ಬಂದಿದೆ. ನಿಮ್ಮ ಅಂತ್ಯವು ಬಂದಿದೆ. ಆದ್ದರಿಂದಲೇ
ಇತರ ಜನಾಂಗಗಳವರು ನಿನ್ನನ್ನು ಗೇಲಿಮಾಡುವರು,
ಮತ್ತು ಎಲ್ಲಾ ದೇಶಗಳು ನಿಮ್ಮನ್ನು ನೋಡಿ ನಗುವವು.
5ದೂರ ಮತ್ತು ಹತ್ತಿರದಲ್ಲಿರುವ ಎಲ್ಲರೂ ನಿನ್ನನ್ನು ಹಾಸ್ಯ

ಮಾಡುವರು. ನಿನ್ನ ಹೆಸರನ್ನು ನೀನು ಕೆಡಿಸಿದ್ದೀ. ನೀನು ಗದ್ದಲದಿಂದ ತುಂಬಿ ಹೋಗಿರುವೆ.

6“‘ಇಗೋ, ಜೆರುಸಲೇಮಿನಲ್ಲಿ ಇತರರನ್ನು ಕೊಲ್ಲುವ
ದಕ್ಕಾಗಿಯೇ ತಮ್ಮನ್ನು ಬಲಿಷ್ಠರನ್ನಾಗಿ ಮಾಡಿಕೊಂಡಿ
ರುವ ಇಸ್ರೇಲಿನ ಅಧಿಪತಿಗಳು ಇದ್ದಾರೆ. 7ಜೆರುಸಲೇಮಿನ
ಜನರು ತಮ್ಮನ್ನು ಹೆತ್ತವರನ್ನು ಸನ್ಮಾನಿಸುವುದಿಲ್ಲ. ಪರ
ದೇಶಸ್ಥರನ್ನು ಹಿಂಸಿಸುವರು. ಆ ಸ್ಥಳದಲ್ಲಿ ವಿಧವೆರಿಗೂ
ಅನಾಥರಿಗೂ ಮೋಸ ಮಾಡುವರು. 8ನೀವು ನನ್ನ ಪವಿತ್ರ
ವಸ್ತುಗಳನ್ನು ಕಡೆಗಾಣಿಸಿರುವಿರಿ. ನಾನು ನೇಮಿಸಿರುವ
ವಿಶೇಷ ವಿಶ್ರಾಂತಿಯ ದಿವಸಗಳನ್ನು ಅಲಕ್ಷ್ಯ ಮಾಡು
ತ್ತೀರಿ. 9ಜೆರುಸಲೇಮ್ ನಿವಾಸಿಗಳು ಇತರರ ಬಗ್ಗೆ ಸುಳ್ಳು
ವದಂತಿ ಹಬ್ಬಿಸುತ್ತಾರೆ. ಆ ನಿರಪರಾಧಿ ಜನರನ್ನು ಹತ್ಯೆ
ಮಾಡಲು ಹಾಗೆ ಮಾಡುತ್ತಾರೆ. ಆ ಜನರು ಬೆಟ್ಟದ ಮೇಲೆ
ಹೋಗಿ ಸುಳ್ಳು ದೇವರುಗಳನ್ನು ಸನ್ಮಾನಿಸುವುದಕ್ಕಾಗಿ
ಊಟಮಾಡುತ್ತಾರೆ.

“‘ಜೆರುಸಲೇಮಿನ ಜನರು ಎಲ್ಲಾ ಬಗೆಯ ಲೈಂಗಿಕ
ಪಾಪಗಳನ್ನು ಮಾಡುತ್ತಾರೆ. 10ತಮ್ಮ ತಂದೆಯ
ಹೆಂಡತಿಯರೊಂದಿಗೆ ಅನೈತಿಕ ಸಂಬಂಧವಿಟ್ಟು ಕೊಳ್ಳು
ತ್ತಾರೆ. ಸ್ತ್ರೀಯರ ಮೇಲೆ ಅತ್ಯಾಚಾರ ಮಾಡುತ್ತಾರೆ;
ಮುಟ್ಟಾಗಿ ಅಶುದ್ಧರಾಗಿರುವ ಸ್ತ್ರೀಯರ ಮೇಲೂ ಅವರು
ಅತ್ಯಾಚಾರ ಮಾಡುತ್ತಾರೆ. 11ಇಂತಹ ಪಾಪಗಳನ್ನು ತಮ್ಮ
ನೆರೆಯವನ ಹೆಂಡತಿಯೊಂದಿಗೆ ನಡಿಸುತ್ತಾರೆ. ಒಬ್ಬನು
ತನ್ನ ಸ್ವಂತ ಸೊಸೆಯೊಂದಿಗೆ ಮಲಗಿ ಆಕೆಯನ್ನು ಅಶುದ್ಧಳ
ನ್ನಾಗಿ ಮಾಡಿದನು. ಮತ್ತೊಬ್ಬನು ತನ್ನ ತಂದೆಯ ಮಗಳು,
ತನ್ನ ತಂಗಿಯನ್ನೇ ಬಲವಂತದಿಂದ ಕೆಡಿಸಿರುತ್ತಾನೆ.

12“‘ಜೆರುಸಲೇಮಿನಲ್ಲಿ ನೀವು ಕೊಲೆ ಮಾಡುವದ
ಕ್ಕಾಗಿ ಹಣ ತೆಗೆದುಕೊಳ್ಳುತ್ತೀರಿ. ಸಾಲಕೊಟ್ಟ ಅದಕ್ಕೆ ಬಡ್ಡಿ
ತೆಗೆದುಕೊಳ್ಳುತ್ತೀರಿ. ಸ್ವಲ್ಪ ಹಣ ಮಾಡುವದಕ್ಕಾಗಿ ನಿಮ್ಮ
ನೆರೆಯವನನ್ನೇ ಮೋಸ ಮಾಡುತ್ತೀರಿ. ನನ್ನನ್ನು
ನೀವು ಮರೆತು ಬಿಟ್ಟಿರುವಿರಿ.’ ನನ್ನ ಒಡೆಯನಾದ
ಯೆಹೋವನು ಇದನ್ನು ಹೇಳಿದ್ದಾನೆ.

13“ದೇವರು ಹೀಗೆ ಹೇಳಿದನು: ‘ನೋಡಿರಿ ನಾನು
ಕೈಯನ್ನು ಬಡಿದು ನಿಮ್ಮನ್ನು ನಿಲ್ಲಿಸಿ ಬಿಡುವೆನು. ನೀವು
ಮೋಸ ಮಾಡಿದ್ದಕ್ಕಾಗಿಯೂ, ಜನರನ್ನು ಕೊಲೆ ಮಾಡಿದ್ದ
ಕ್ಕಾಗಿಯೂ ನಿಮ್ಮನ್ನು ಶಿಕ್ಷಿಸುವೆನು. 14ನಾನು ನಿಮ್ಮನ್ನು
ಶಿಕ್ಷಿಸಲು ಬಂದಾಗ ನೀವು ಧೈರ್ಯಶಾಲಿಗಳಾಗುವಿರಾ?
ನಿಮ್ಮಲ್ಲಿ ಬಲವಿರುವದೊ? ನಾನೇ ಯೆಹೋವನು.
ನಾನು ಹೇಳಿದ ಪ್ರಕಾರ ಮಾಡುವೆನು. 15ನಾನು ನಿಮ್ಮನ್ನು
ಜನಾಂಗಗಳ ಮಧ್ಯೆ ಚದರಿಸಿ ಬಿಡುವೆನು. ನಿಮ್ಮನ್ನು
ಬಹುದೇಶಗಳ ಮಧ್ಯೆ ಅಟ್ಟಿಬಿಡುವೆನು. ಈ ನಗರದಲ್ಲಿ
ರುವ ಅಸಹ್ಯ ವಸ್ತುಗಳನ್ನೆಲ್ಲಾ ಸಂಪೂರ್ಣವಾಗಿ ನಾಶ
ಮಾಡುವೆನು. 16ಜೆರುಸಲೇಮೇ, ನಿನಗೆ ಸಂಭವಿಸುವ
ಸಂಗತಿಗಳಿಂದ ಜನಾಂಗಗಳ ಮುಂದೆ ನನ್ನ ಕೀರ್ತಿಯು
ಹಾಳಾಗುವುದು. ಆಗ ನಾನು ಯೆಹೋವನೆಂದು ನೀನು
ತಿಳಿದುಕೊಳ್ಳುವಿ.’”

## ಇಸ್ರೇಲ್ ಉಪಯೋಗವಿಲ್ಲದ ಹೊಲಸು

17ಯೆಹೋವನ ವಾಕ್ಯವು ನನಗೆ ಬಂತು. ಆತನು
ಇಂತೆಂದನು: 18“ನರಪುತ್ರನೇ, ಇಸ್ರೇಲ್ ಜನಾಂಗವು
ನನ್ನ ಪಾಲಿಗೆ ನಿಷ್ಪ್ರಯೋಜಕವಾಗಿದೆ. ಅವರು ತಾಮ್ರ
ದಂತೆ, ತವರದಂತೆ, ಕಬ್ಬಿಣದಂತೆ, ಮತ್ತು ಸೀಸದಂತೆ
ಮತ್ತು ಬೆಳ್ಳಿಯನ್ನು ಕುಲುಮೆಯಲ್ಲಿ ಕರಗಿಸಿ ಶುದ್ಧೀಕರಿಸಿ
ದಾಗ ಉಳಿಯುವ ಕಂದುಬೆಳ್ಳಿಯಂತೆ ಇದ್ದಾರೆ.
19ಒಡೆಯನಾದ ಯೆಹೋವನು ಹೀಗನ್ನುತ್ತಾನೆ. ‘ನೀವೆ
ಲ್ಲರೂ ಪ್ರಯೋಜನವಿಲ್ಲದ ಲೋಹವಾಗಿದ್ದೀರಿ.
ಆದ್ದರಿಂದ ನಾನು ನಿಮ್ಮನ್ನು ಜೆರುಸಲೇಮಿನೊಳಗೆ ಒಟ್ಟು
ಗೂಡಿಸುತ್ತೇನೆ. 20ಕೆಲಸಗಾರರು ಬೆಳ್ಳಿ, ತಾಮ್ರ, ಸೀಸ,
ತವರ, ಕಬ್ಬಿಣ ಇವುಗಳನ್ನೆಲ್ಲಾ ಬೆಂಕಿಗೆ ಹಾಕುವರು.
ಬೆಂಕಿಯನ್ನೂದಿ ಶಾಖ ಹೆಚ್ಚು ಮಾಡುವರು. ಆಗ ಲೋಹ
ಗಳು ಕರಗಲು ಪ್ರಾರಂಭವಾಗುವವು. ಅದೇ ರೀತಿಯಲ್ಲಿ
ನಾನು ನಿಮ್ಮನ್ನು ನನ್ನ ಬೆಂಕಿಯನ್ನು ಹಾಕಿ ಕರಗಿಸುವೆನು.
ನನ್ನ ರೌದ್ರವೇ ಆ ಬೆಂಕಿ. 21ನಾನು ನಿಮ್ಮನ್ನು ಆ ಬೆಂಕಿ
ಯಲ್ಲಿ ಹಾಕುವೆನು. ನನ್ನ ರೌದ್ರವೆಂಬ ಬೆಂಕಿಯನ್ನು
ಊದಿ ಶಾಖ ಹೆಚ್ಚಿಸುವೆನು. ಆಗ ನೀವು ಕರಗಲು
ಪ್ರಾರಂಭಿಸುವಿರಿ. 22ಬೆಳ್ಳಿಯು ಕುಲುಮೆಯಲ್ಲಿ ಕರಗಿ
ಹೋಗುವಂತೆಯೇ ನೀವು ಪಟ್ಟಣದಲ್ಲಿ ಕರಗಿಹೋಗು
ವಿರಿ. ಯೆಹೋವನಾದ ನಾನೇ ನನ್ನ ಕೋಪವನ್ನು ನಿಮ್ಮ
ಮೇಲೆ ಸುರಿದೆನೆಂದು ಆಗ ನೀವು ಅರ್ಥ ಮಾಡಿ
ಕೊಳ್ಳುವಿರಿ.’”

## ಜೆರುಸಲೇಮ್ ವಿರುದ್ಧ ಯೆಹೆಜ್ಕೇಲನ ಮಾತುಗಳು

23ಯೆಹೋವನ ವಾಕ್ಯವು ನನಗೆ ಬಂದಿತು. ಆತನು,
24“ನರಪುತ್ರನೇ, ಇದನ್ನು ಜೆರುಸಲೇಮಿಗೆ ಹೇಳು. ಮಳೆ
ಯನ್ನೇ ಪಡೆದಿಲ್ಲದ ಭೂಮಿಯಂತೆ ಆಕೆ ಇದ್ದಾಳೆಂದು
ಆಕೆಗೆ ತಿಳಿಸು. ನನ್ನ ಕೋಪದ ಸಮಯದಲ್ಲಿ ಆಕೆಯ
ಮೇಲೆ ಮಳೆಯೇ ಸುರಿದಿಲ್ಲ. 25ಜೆರುಸಲೇಮಿನ ಪ್ರವಾದಿ
ಗಳು ತಾನು ಬೇಟೆಯಾಡಿ ಕೊಂದ ಪ್ರಾಣಿಯನ್ನು ತಿನ್ನುವ
ಗರ್ಜಿಸುವ ಸಿಂಹದಂತಿದ್ದಾರೆ. ಆ ಪ್ರವಾದಿಗಳು ಅನೇಕ
ಪ್ರಾಣಗಳನ್ನು ತೆಗೆದುಕೊಂಡಿದ್ದಾರೆ. ಅವರಿಂದ ಬೆಲೆ
ಬಾಳುವ ವಸ್ತುಗಳನ್ನು ಕದ್ದುಕೊಂಡಿದ್ದಾರೆ. ಜೆರುಸಲೇ
ಮಿನಲ್ಲಿ ಅನೇಕ ಸ್ತ್ರೀಯರು ವಿಧವೆಯರಾಗಲು ಅವರೇ
ಕಾರಣರಾಗಿದ್ದಾರೆ.

26“ಯಾಜಕರು ನನ್ನ ಉಪದೇಶವನ್ನು ನಿರಾಕರಿಸಿರು
ತ್ತಾರೆ; ಪರಿಶುದ್ಧ ಸಂಗತಿಗಳನ್ನು ಸರಿಯಾಗಿ ಲಕ್ಷ್ಯ

ಮಾಡುತ್ತಿಲ್ಲ; ಅವುಗಳಿಗೆ ಮಹತ್ವವನ್ನು ಕೊಡುತ್ತಿಲ್ಲ.
ಅವರು ಪವಿತ್ರ ವಸ್ತುಗಳನ್ನು ಅಪವಿತ್ರ ವಸ್ತುಗಳಂತೆ
ನೋಡುತ್ತಿದ್ದಾರೆ. ಯಾವುದು ಶುದ್ಧ ಯಾವುದು ಅಶುದ್ಧ
ಎಂಬುದರ ಬಗ್ಗೆ ಅವರು ಜನರಿಗೆ ಸರಿಯಾಗಿ
ಉಪದೇಶಿಸುತ್ತಿಲ್ಲ. ನನ್ನ ವಿಶೇಷ ವಿಶ್ರಾಂತಿ ದಿವಸಗಳನ್ನು
ಮಾನ್ಯಮಾಡುತ್ತಿಲ್ಲ. ನಾನು ಏನೂ ಅಲ್ಲವೆಂಬಂತೆ
ನನ್ನನ್ನು ಅವರು ನೋಡುತ್ತಾರೆ.
27‘‘ಜೆರುಸಲೇಮಿನ ನಾಯಕರು ತಾನು ಹಿಡಿದ ಪ್ರಾಣಿ
ಯನ್ನು ತಿನ್ನುವ ತೋಳಕ್ಕೆ ಸಮಾನರಾಗಿದ್ದಾರೆ. ಅವರು
ಧನಿಕರಾಗುವದಕ್ಕಾಗಿ ಜನರನ್ನು ಹಿಡಿದು ಕೊಲ್ಲುವರು.
28‘‘ಪ್ರವಾದಿಗಳು ಜನರನ್ನು ಎಚ್ಚರಿಸುವದಿಲ್ಲ. ಸತ್ಯ
ವನ್ನು ಮುಚ್ಚಿಡುತ್ತಾರೆ. ಒಂದು ಗೋಡೆಯನ್ನು ದುರಸ್ತಿ
ಮಾಡದೆ ಅದರ ತೂತುಗಳನ್ನು ಗಾರೆಯಿಂದ ಮುಚ್ಚುವ
ಕೆಲಸಗಾರರಂತಿದ್ದಾರೆ. ಅವರು ಸುಳ್ಳುದರ್ಶನಗಳನ್ನೇ
ನೋಡುತ್ತಾರೆ. ತಮ್ಮ ಭವಿಷ್ಯದಬಗ್ಗೆ ಶಕುನದ ಮೂಲಕ
ತಿಳಿದುಕೊಳ್ಳುವುದೆಲ್ಲ ಸುಳ್ಳಾಗಿರುತ್ತದೆ. ಅವರು, ‘ನನ್ನ
ಒಡೆಯನಾದ ಯೆಹೋವನು ಹೇಳಿದನು’ ಎಂಬುದಾಗಿ
ಸುಳ್ಳು ಹೇಳುವರು. ಆದರೆ ನಿಜವಾಗಿಯೂ
ಯೆಹೋವನು ಅವರ ಕೂಡ ಮಾತನಾಡಲಿಲ್ಲ.
29‘‘ಸಾಮಾನ್ಯ ಜನರು ಮೋಸ ಮಾಡುತ್ತಾರೆ ಮತ್ತು
ದರೋಡೆ ಮಾಡುತ್ತಾರೆ. ತಾವು ಧನಿಕರಾಗುವದಕ್ಕೆ
ನಿಸ್ಸಹಾಯಕರಾದ ಭಿಕ್ಷೆಗಾರರನ್ನು ಸುಲುಕೊಳ್ಳುವರು.
ಅವರು ಪರದೇಶಿಗಳಿಗೆ ಮೋಸಮಾಡಿ ಅವರಿಗೆ
ಅನ್ಯಾಯ ಮಾಡುವರು.
30‘‘ನನ್ನ ಕೋಪದಿಂದ ದೇಶವು ನಾಶವಾಗದಂತೆ
ಅದನ್ನು ರಕ್ಷಿಸಲು ಗೋಡೆಯನ್ನು ಸರಿಪಡಿಸುವುದ
ಕ್ಕಾಗಿಯೂ ಗೋಡೆಯು ಒಡೆದುಹೋಗಿದ್ದ ಸ್ಥಳದಲ್ಲಿ
ನಿಂತುಕೊಳ್ಳುವುದಕ್ಕಾಗಿ ಅವರಲ್ಲಿ ನಾನು ಒಬ್ಬನನ್ನು
ಎದುರುನೋಡಿದೆ. ಆದರೆ ಯಾರೂ ನನಗೆ ಸಿಗಲಿಲ್ಲ.
31ಅದಕ್ಕಾಗಿ ನಾನು ಅವರಿಗೆ ನನ್ನ ಕೋಪವನ್ನು ತೋರಿಸು
ವೆನು. ಅವರನ್ನು ಬೆಂಕಿಯಂತೆ ಸಂಪೂರ್ಣವಾಗಿ ನಾಶ
ಮಾಡುವೆನು. ಅವರ ದುಷ್ಟತನಕ್ಕಾಗಿ ನಾನು ಅವರನ್ನು
ಶಿಕ್ಷಿಸುವೆನು. ಅವರೇ ಅದಕ್ಕೆ ಜವಾಬ್ದಾರರು.’’ ಇವು ನನ್ನ
ಒಡೆಯನಾದ ಯೆಹೋವನ ನುಡಿಗಳು.

23 ಯೆಹೋವನ ಮಾತುಗಳು ನನಗೆ ಬಂದವು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ,
ಸಮಾರ್ಯ ಮತ್ತು ಜೆರುಸಲೇಮಿನ ಈ ಕಥೆಯನ್ನು
ಕೇಳು. ಇಬ್ಬರು ಅಕ್ಕ ತಂಗಿಯರು ಇದ್ದರು. ಅವರು
ಒಂದೇ ತಾಯಿಯ ಮಕ್ಕಳಾಗಿದ್ದರು. 3ಅವರು ಈಜಿಪ್ಟಿನ
’ಲ್ಲಿ ಇನ್ನೂ ಎಳೆ ಪ್ರಾಯದಲ್ಲಿರುವಾಗಲೇ ಸೂಳೆಯ
ರಾದರು. ಈಜಿಪ್ಟಿನಲ್ಲಿ ಅವರು ಮೊದಲ ಬಾರಿ
ಸಂಭೋಗಿಸಿದರು. ಪುರುಷರು ತಮ್ಮ ಮೊಲೆತೊಟ್ಟು
ಗಳನ್ನು ಮುಟ್ಟಿ ಅವರ ಎಳೆಸ್ತನಗಳನ್ನು ಹಿಡಿಯಲು
ಬಿಟ್ಟರು.
4ಹಿರಿಯಕ್ಕನ ಹೆಸರು ಒಹೊಲ. ತಂಗಿಯ ಹೆಸರು
ಒಹೊಲೀಬ. ಅವರಿಬ್ಬರೂ ನನ್ನ ಹೆಂಡತಿಯರಾದರು.
ಅವರು ಗಂಡುಮಕ್ಕಳನ್ನು ಮತ್ತು ಹೆಣ್ಣು ಮಕ್ಕಳನ್ನು
ಹೆತ್ತರು. ಒಹೊಲಳು ಸಮಾರ್ಯಳು ಮತ್ತು ಒಹೊಲೀ
ಬಳು ಜೆರುಸಲೇಮ್.
5‘‘ಒಹೊಲಳು ನನಗೆ ಅಪನಂಬಿಗಸ್ತಳಾದಳು. ಆಕೆ
ಸೂಳೆಯಂತೆ ಜೀವಿಸ ತೊಡಗಿದಳು. ಆಕೆ ಪುರುಷರಿಗಾಗಿ
ಆಸೆಪಟ್ಟಳು. 6ನೀಲಿ ಸಮವಸ್ತ್ರ ಧರಿಸಿದ್ದ ಅಶ್ಶೂರದ
ಸೈನಿಕರನ್ನು ನೋಡಿದಳು. ಅವರೆಲ್ಲಾ ಕುದುರೆ ಸವಾರಿ
ಮಾಡುವ ಸುಂದರವಾದ ಯುವಕರು. ಅವರೆಲ್ಲಾ
ನಾಯಕರೂ ಅಧಿಕಾರಿಗಳೂ ಆಗಿದ್ದರು. 7ಒಹೊಲಳು
ಅವರೊಂದಿಗೆ ರಮಿಸ ತೊಡಗಿದಳು. ಅವರೆಲ್ಲರೂ
ಅಶ್ಶೂರರ ಸೈನ್ಯದಿಂದ ಆರಿಸಿ ತೆಗೆದವರಾಗಿದ್ದರು. ಆಕೆಗೆ
ಅವರೆಲ್ಲರ ಜೊತೆಯಲ್ಲೂ ಮಲಗಬೇಕಿತ್ತು. ಅವರ
ಹೊಲಸು ವಿಗ್ರಹಗಳಿಂದ ಹೊಲಸಾದಳು. 8ಇದರ ಜೊತೆ
ಯಲ್ಲಿಯೇ ಈಜಿಪ್ಟಿನೊಂದಿಗೆ ತನ್ನ ಪ್ರಣಯ ಸಂಬಂಧ
ವನ್ನು ಮುಂದುವರಿಸುತ್ತಿದ್ದಳು. ಆಕೆಯು ಇನ್ನೂ ಎಳೆಯ
ಹುಡುಗಿಯಾಗಿದ್ದಾಗಲೇ ಈಜಿಪ್ಟ್ ಆಕೆಯೊಂದಿಗೆ
ಸಂಭೋಗ ಮಾಡಿತ್ತು. ಅವಳ ಎಳೇ ಸ್ತನಗಳನ್ನು ಹಿಸುಕಿದ
ವರಲ್ಲಿ ಮೊದಲನೆಯವರು ಈಜಿಪ್ಟಿನವರೇ. ಈಜಪ್ಟ್
ತನ್ನ ಅನೈತಿಕ ಪ್ರೀತಿಯನ್ನು ಆಕೆಯ ಮೇಲೆ ಸುರಿಯಿತು.
9ಆಕೆಯ ಮಿಂಡರಿಗೆ ನಾನು ಆಕೆಯನ್ನು ಬಿಟ್ಟುಕೊಟ್ಟೆನು.
ಆಕೆಗೆ ಅಶ್ಶೂರದವರು ಬೇಕಾಯಿತು. ನಾನು ಆಕೆಯನ್ನು
ಅವರಿಗೆ ಬಿಟ್ಟುಕೊಟ್ಟೆನು. 10ಅವರು ಬಲವಂತದಿಂದ
ಆಕೆಯನ್ನು ಸಂಭೋಗಿಸಿದರು. ಆಕೆಯ ಮಕ್ಕಳನ್ನು
ತೆಗೆದುಕೊಂಡರು. ಖಡ್ಗವನ್ನು ತೆಗೆದುಕೊಂಡು ಆಕೆ
ಯನ್ನು ಕೊಂದುಹಾಕಿದರು. ಆಕೆಯನ್ನು ಶಿಕ್ಷಿಸಿದರು.
ಸ್ತ್ರೀಯರು ಈಗಲೂ ಆಕೆಯ ವಿಷಯ ಮಾತ
ನಾಡುತ್ತಿದ್ದಾರೆ.
11‘‘ಆಕೆಯ ತಂಗಿಯಾದ ಒಹೊಲೀಬಳು ಆಕೆಗಾದದ
ನ್ನೆಲ್ಲಾ ನೋಡಿದ್ದಳು. ಆದರೆ ಒಹೊಲೀಬಳು ಅಕ್ಕನಿಗಿಂತ
ಹೆಚ್ಚು ಪಾಪ ಮಾಡಿದಳು. ಆಕೆ ಒಹೊಲಳಿಗಿಂತ ಹೆಚ್ಚು
ಅಪನಂಬಿಗಸ್ತಿಕೆಯುಳ್ಳವಳಾಗಿದ್ದಳು. 12ಆಕೆಗೆ ಅಶ್ಶೂ
ರದ ಅಧಿಕಾರಿಗಳೂ ನಾಯಕರುಗಳೂ ಬೇಕಾಗಿದ್ದರು.
ಆಕೆಗೆ ನೀಲ ಸಮವಸ್ತ್ರ ಧರಿಸಿ ಕುದುರೆ ಸವಾರಿ ಮಾಡುವ
ಸೈನಿಕರು ಬೇಕಾಗಿದ್ದರು. ಅವರೆಲ್ಲಾ ಮನೋಹರವಾದ
ಯುವಕರು. 13ಆಕೆಯು ತನ್ನನ್ನು ಹೊಲಸು ಮಾಡಿ
ಕೊಂಡಿರುವುದನ್ನು ನಾನು ನೋಡಿದೆನು. ಆ ಸ್ತ್ರೀಯರಿ
ಬ್ಬರೂ (ನಾಶನದ) ಒಂದೇ ಮಾರ್ಗವನ್ನು ಅನು
ಸರಿಸುತ್ತಿದ್ದರು.

14‘‘ಒಹೊಲೀಬಳು ನನಗೆ ಅಪನಂಬಿಗಸ್ತಳಾಗಿ
ಮುಂದುವರಿದಳು. ಗೋಡೆಯ ಮೇಲೆ ಕೆತ್ತಲ್ಪಟ್ಟಿದ್ದ
ಗಂಡಸರ ಚಿತ್ರಗಳನ್ನು ಆಕೆ ನೋಡಿದಳು. ಅವು ಕೆಂಪು
ಸಮವಸ್ತ್ರ ಧರಿಸಿದ್ದ ಕಸ್ದೀಯ ಸೈನಿಕರ ಚಿತ್ರಗಳು. 15ಅವರು
ಸೊಂಟಕ್ಕೆ ಪಟ್ಟಿಯನ್ನು ಬಿಗಿದು, ಉದ್ದ ಮುಂಡಾಸವನ್ನು
ಧರಿಸಿದ್ದರು. ಅವರೆಲ್ಲರೂ ಅಧಿಕಾರಿಗಳಂತೆ ಕಾಣುತ್ತಿ
ದ್ದರು. ಅವರೆಲ್ಲರೂ ಬಾಬಿಲೋನಿನಲ್ಲಿಯೇ ಹುಟ್ಟಿ
ಬೆಳೆದವರಾಗಿದ್ದರು. 16ಒಹೊಲೀಬಳು ಅವರನ್ನು ಕಂಡ
ಕೂಡಲೇ ಅವರಿಗಾಗಿ ಆಸೆಪಟ್ಟು ಬಾಬಿಲೋನಿನಲ್ಲಿದ್ದ
ಅವರ ಬಳಿಗೆ ಸಂದೇಶಕರನ್ನು ಕಳುಹಿಸಿದಳು. 17ಆಗ ಆ
ಬಾಬಿಲೋನಿನವರು ಬಂದು ಆಕೆಯ ರತಿಮಂಚವನ್ನೇರಿ
ಆಕೆಯನ್ನು ಸಂಗಮಿಸಿದರು. ಆಕೆಯನ್ನು ಚೆನ್ನಾಗಿ ಅನು
ಭೋಗಿಸಿ ಮಲಿನವನ್ನಾಗಿ ಮಾಡಿದರು. ಆದ್ದರಿಂದ ಆಕೆಗೆ
ಅವರು ಅಸಹ್ಯವೆನಿಸಿತು.

18‘‘ತಾನು ಅಪನಂಬಿಗಸ್ತಳೆಂದು ಎಲ್ಲರೂ ತನ್ನನ್ನು
ಗುರುತಿಸುವಂತೆ ಒಹೊಲೀಬಳು ಮಾಡಿದಳು. ಆಕೆಯು
ತನ್ನ ನಗ್ನಶರೀರವನ್ನು ತೋರಿಸಿದಳು. ಆದ್ದರಿಂದ ಅವಳ
ಅಕ್ಕ ನನಗೆ ಹೇಗೆ ಅಸಹ್ಯವಾದಳೊ ಅದೇ ರೀತಿ ಈಕೆಯೂ
ನನಗೆ ಅಸಹ್ಯವಾದಳು. ನನಗೆ ಆಕೆಯ ಅಕ್ಕನ ಮೇಲಿದ್ದ
ಅನುರಾಗ ಹೇಗೆ ತೊಲಗಿಹೋಯಿತೋ ಹಾಗೆಯೇ
ಈಕೆಯ ಮೇಲಿನ ಅನುರಾಗವೂ ತೊಲಗಿ ಹೋಯಿತು.
19ಬಾರಿಬಾರಿಗೆ ಒಹೊಲೀಬಳು ನನಗೆ ಅಪನಂಬಿಗಸ್ತ
ಳಾದಳು. ಈಜಿಪ್ಟಿನಲ್ಲಿ ಆಕೆಯು ನಡಿಸಿದ್ದ ಪ್ರಣಯ
ಕೇಳಿಯನ್ನು ನೆನಪು ಮಾಡಿದ್ದಳು. 20ಕತ್ತೆಗಳ ಲಿಂಗಗ
ಳಂತಿದ್ದ ಲೈಂಗಿಕ ಲಿಂಗಗಳನ್ನು ಹೊಂದಿದ್ದ ಈಜಿಪ್ಟಿನ
ಪ್ರಿಯರನ್ನು ಆಕೆ ಆಸೆಪಟ್ಟಳು ಮತ್ತು ಕುದುರೆಯ
ವೀರ್ಯದಂತೆ ಹರಿಯುವ ಅವರ ವೀರ್ಯವನ್ನು ಆಕೆ
ನೆನಪು ಮಾಡಿಕೊಂಡಳು.

21‘‘ಒಹೊಲೀಬಳೇ, ನಿನ್ನ ಯೌವನ ಕಾಲದಲ್ಲಿ ನೀನು
ಅನುಭೋಗಿಸಿದ್ದನ್ನು ಕನಸು ಕಾಣುತ್ತೀ, ನಿನ್ನ ಈಜಿಪ್ಟಿನ
ಪ್ರಿಯರು ನಿನ್ನ ಸ್ತನದ ತೊಟ್ಟುಗಳನ್ನು ಮುಟ್ಟಿ ನಿನ್ನ ಎಳೆ
ಸ್ತನಗಳನ್ನು ಹಿಸುಕಿದ್ದನ್ನು ನೀನು ಜ್ಞಾಪಕಕ್ಕೆ ತಂದು
ಕೊಳ್ಳುತ್ತಿರುವೆ. 22ಆದುದರಿಂದ ನನ್ನ ಒಡೆಯನಾದ
ಯೆಹೋವನು ಹೇಳುವದೇನಂದರೆ, ‘ಒಹೊಲೀಬಳೇ,
ನಿನ್ನ ಪ್ರಿಯರಲ್ಲಿ ಕೆಲವರು ನಿನಗೆ ಅಸಹ್ಯವಾಗಿದ್ದಾರೆ.
ಆದರೆ ನಾನು ಆ ಪ್ರಿಯತಮರನ್ನು ಇಲ್ಲಿಗೆ ಕರೆದು
ಕೊಂಡು ಬರುವೆ. ಅವರು ನಿನ್ನನ್ನು ಸುತ್ತುವರಿಯುವರು.
23ನಾನು ಬಾಬಿಲೋನಿನ ಕಸ್ದೀಯ ಪುರುಷರನ್ನು ಬರ
ಮಾಡುವೆನು. ನಾನು ಪೆಕೋದ್, ಷೋಯ, ಮತ್ತು
ಕೋಯ ಇಲ್ಲಿಂದಲೂ, ಅಶ್ಶೂರದ ಯೌವನಸ್ಥರನ್ನು
ಬರಮಾಡುವೆನು. ಅಲ್ಲಿಯ ಎಲ್ಲಾ ಅಧಿಕಾರಿಗಳನ್ನೂ
ನಾಯಕರನ್ನೂ ಬರಮಾಡುವೆನು. ಅವರೆಲ್ಲರೂ
ಸುಂದರವಾದ ಯುವಕರು, ಅಧಿಕಾರಿಗಳು, ಆರಿಸಲ್ಪಟ್ಟ
ಯೋಧರು, ಅಶ್ವರೂಢರೂ ಆಗಿರುವರು. 24ಅವರು
ನಿನ್ನ ವಿರುದ್ಧವಾಗಿ ರಥಗಳಲ್ಲಿಯೂ ಗಾಡಿಗಳಲ್ಲಿಯೂ
ಅಂತರಾಷ್ಟ್ರೀಯ ಸೈನ್ಯವಾಗಿ ಬರುವರು. ಅವರ ಕೈಯಲ್ಲಿ
ಬರ್ಜಿ, ಗುರಾಣಿ, ಶಿರಸ್ತ್ರಾಣಗಳಿರುವವು. ಅವರು ನಿನ್ನನ್ನು
ಸುತ್ತುವರಿಯುವರು. ನೀನು ನನಗೆ ಏನು ಮಾಡಿದ್ದೀ
ಎಂದು ನಾನು ಹೇಳಿದಾಗ ಅವರು ತಮ್ಮ ಇಷ್ಟ ಪ್ರಕಾರ
ನಿನ್ನನ್ನು ಶಿಕ್ಷಿಸುವರು. 25ನಾನು ನಿನ್ನ ವಿರುದ್ಧವಾಗಿ ನನ್ನ
ಈರ್ಷೆಯ ಕೋಪವನ್ನು ನಿನ್ನ ಮೇಲೆ ಸುರಿಸುವೆನು.
ಅವರಿಗೆ ಸಿಟ್ಟು ಬಂದು ನಿನ್ನನ್ನು ಹಿಂಸಿಸುವರು. ನಿನ್ನ ಕಿವಿ
ಮೂಗುಗಳನ್ನು ಕತ್ತರಿಸಿ ಹಾಕುವರು. ತಮ್ಮ ಖಡ್ಗದಿಂದ
ನಿನ್ನನ್ನು ಸಂಹರಿಸುವರು. ಆಮೇಲೆ ನಿನ್ನ ಮಕ್ಕಳನ್ನು
ತೆಗೆದುಕೊಳ್ಳುವರು ಮತ್ತು ನಿನ್ನಲ್ಲಿ ಉಳಿದಿರುವುದನ್ನೆಲ್ಲ
ಸುಟ್ಟುಹಾಕುವರು. 26ನಿನ್ನಲ್ಲಿರುವ ಉತ್ಕೃಷ್ಟವಾದ
ಬಟ್ಟೆ ಆಭರಣಗಳನ್ನೆಲ್ಲಾ ಸುಲುಕೊಳ್ಳುವರು. 27ಬಳಿಕ,
ಈಜಿಪ್ಟ್ ದೇಶದಲ್ಲಿ ಆರಂಭವಾದ ನಿನ್ನ ನೀಚತನಕ್ಕೆ
ಮತ್ತು ಅನೈತಿಕ ಜೀವಿತಕ್ಕೆ ತಡೆಹಾಕುವೆನು. ನೀನು ನಿನ್ನ
ಕಣ್ಣುಗಳನ್ನು ಅವರ ಕಡೆಗೆ ಇನ್ನೆಂದಿಗೂ ತಿರುಗಿಸುವ
ದಿಲ್ಲ. ನೀನು ಅವರನ್ನು ಜ್ಞಾಪಿಸಿಕೊಳ್ಳುವುದಿಲ್ಲ.’’’

28ನನ್ನ ಒಡೆಯನಾದ ಯೆಹೋವನು ಇದನ್ನು ಹೇಳು
ತ್ತಾನೆ. ‘‘ನೀನು ದ್ವೇಷಿಸುವ ಜನರ ಕೈಗೆ ನಿನ್ನನ್ನು ಒಪ್ಪಿಸು
ವೆನು. ನೀನು ಜಿಗುಪ್ಸೆಗೊಂಡ ಜನರಿಗೆ ನಿನ್ನನ್ನು ಒಪ್ಪಿಸು
ವೆನು. 29ಆಗ ಅವರು ನಿನ್ನನ್ನು ಎಷ್ಟು ದ್ವೇಷಿಸುವರೆಂದು
ನಿನಗೆ ತೋರಿಸುವರು. ನೀನು ದುಡಿದವುಗಳನ್ನೆಲ್ಲ
ಅವರು ಕಿತ್ತುಕೊಳ್ಳುವರು. ನಿನ್ನನ್ನು ಬೆತ್ತಲೆಮಾಡಿ ಬಿಟ್ಟು
ಬಿಡುವರು. ಜನರು ನಿನ್ನ ಪಾಪಗಳನ್ನು ಪರಿಪೂರ್ಣವಾಗಿ
ನೋಡುವರು. ನೀನು ಸೂಳೆಯಂತೆ ವರ್ತಿಸಿದ್ದನ್ನು
ಅವರು ನೋಡುವರು. ನಿನ್ನ ನೀಚತನವೂ ನಿನ್ನ ಸೂಳೆ
ತನವೂ 30ನಿನ್ನ ಮೇಲೆ ಇವುಗಳನ್ನು ಬರಮಾಡಿದವು;
ಯಾಕೆಂದರೆ ನೀನು ನನ್ನನ್ನು ತೊರೆದು ಜನಾಂಗಗಳನ್ನು
ಹಿಂಬಾಲಿಸಿದೆ ಮತ್ತು ಅವರ ಕೊಳಕು ವಿಗ್ರಹಗಳಿಂದ
ನಿನ್ನನ್ನು ಕೆಡಿಸಿಕೊಂಡೆ. 31ನೀನು ನಿನ್ನ ಅಕ್ಕನನ್ನು ಅನು
ಸರಿಸಿ ಆಕೆಯಂತೆ ಜೀವಿಸಿದೆ. ಆದ್ದರಿಂದ ಆಕೆಯ
ದಂಡನೆಯ ಲೋಟವನ್ನು ನಾನು ನಿನ್ನ ಕೈಯಲ್ಲಿ
ಇಡುತ್ತೇನೆ.’’ 32ನನ್ನ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ:

‘‘ನೀನು ನಿನ್ನ ಅಕ್ಕನ ಲೋಟದಿಂದ ಕುಡಿಯುವೆ.’’
ಆ ಲೋಟವು ಆಳವಾಗಿಯೂ ಅಗಲವಾಗಿಯೂ
ಇದ್ದು ಪೂರ್ತಿ ತುಂಬಿದೆ. (ಶಿಕ್ಷೆ). ಜನರು ನಿನ್ನನ್ನು
ನೋಡಿ ನಗಾಡುವರು. ನಿನ್ನನ್ನು ಕಂಡು ಹಾಸ್ಯ
ಮಾಡುವರು.

33 ನೀನು ಅಮಲೇರಿದವನ ಹಾಗೆ ತೂರಾಡು. ನೀನು
ಕುಗ್ಗಿಹೋಗುವೆ. ಆ ಲೋಟವು ನಾಶನದ ಮತ್ತು
ಹಾಳುಮಾಡುವ ಲೋಟ. ನಿನ್ನ ಅಕ್ಕ ಕುಡಿದ ಪಾತ್ರೆ
ಯಂತಿರುವದು.
34 ನೀನು ಆ ಲೋಟದಿಂದ ಕುಡಿಯುವೆ. ಕಡೆಯ
ತೊಟ್ಟಿನವರೆಗೂ ನೀನು ಕುಡಿಯುವೆ. ನೀನು ಆ
ಲೋಟವನ್ನು ಒಡೆದುಹಾಕುವೆ. ಮತ್ತು ನಿನ್ನ ಸ್ತನ
ಗಳನ್ನು ಬಗೆದುಕೊಳ್ಳುವೆ. ಒಡೆಯನೂ ಯೆಹೋ
ವನೂ ಆದ ನಾನು ಇದನ್ನು ಹೇಳುವದರಿಂದ ಇದು
ನಡೆಯುವದು.

35‘‘ನನ್ನ ಒಡೆಯನಾದ ಯೆಹೋವನು ಹೀಗೆ ಹೇಳಿ
ದನು. ‘ಜೆರುಸಲೇಮೇ, ನೀನು ನನ್ನನ್ನು ಮರೆತುಬಿಟ್ಟೀ.
ನೀನು ನನ್ನನ್ನು ತೊರೆದುಬಿಟ್ಟೀ; ಆದುದರಿಂದ ನೀನು
ನನ್ನನ್ನು ತೊರೆದ ಸೂಳೆಯಂತೆ ಜೀವಿಸಿದ್ದಕ್ಕೆ ಶಿಕ್ಷೆ ಅನು
ಭವಿಸಬೇಕು. ನಿನ್ನ ನೀಚ ನಡತೆಗಾಗಿ ನೀನು ಕಷ್ಟ
ಅನುಭವಿಸಬೇಕು.’’’

### ಒಹೊಲ ಮತ್ತು ಒಹೊಲೀಬಳ ನ್ಯಾಯವಿಚಾರಣೆ

36ನನ್ನ ಒಡೆಯನಾದ ಯೆಹೋವನು ನನಗೆ ಹೀಗೆ
ಹೇಳಿದನು, ‘‘ನರಪುತ್ರನೇ, ನೀನು ಒಹೊಲ ಮತ್ತು
ಒಹೊಲೀಬಳನ್ನು ನ್ಯಾಯವಿಚಾರಣೆ ಮಾಡುವಿಯೋ?
ಆಗ ನೀನು, ಗಾಬರಿಗೊಳಿಸುವ ಅವರ ದುಷ್ಟತನವನ್ನು
ಅವರಿಗೆ ತಿಳಿಸು. 37ಅವರು ವ್ಯಭಿಚಾರ ಮಾಡಿದ್ದಾರೆ.
ಅವರು ಕೊಲೆ ಮಾಡಿರುತ್ತಾರೆ. ಅವರು ಸೂಳೆಯಂತೆ
ವರ್ತಿಸಿದ್ದಾರೆ. ಅವರು ತಮ್ಮ ಹೊಲಸು ವಿಗ್ರಹಗ
ಳೊಂದಿಗೆ ಇರಲು ನನ್ನನ್ನು ತೊರೆದುಬಿಟ್ಟಿದ್ದಾರೆ. ಅವ
ರಲ್ಲಿ ನನ್ನ ಮಕ್ಕಳು ಇದ್ದಾರೆ. ಆದರೆ ಅವರನ್ನು ಬಲವಂತ
ದಿಂದ ಬೆಂಕಿಯ ಮೇಲೆ ದಾಟಿಸಿದರು. ತಮ್ಮ ಹೊಲಸು
ವಿಗ್ರಹಗಳಿಗೆ ಆಹಾರ ಕೊಡುವಂತೆ ಅವರು ಹಾಗೆ
ಮಾಡಿದರು. 38ಅಲ್ಲದೆ ನನ್ನ ಪವಿತ್ರ ಆಲಯವನ್ನೂ ನನ್ನ
ಪವಿತ್ರವಾದ ವಿಶೇಷ ವಿಶ್ರಾಂತಿ ದಿವಸಗಳನ್ನೂ ಅಲಕ್ಷ್ಯ
ಮಾಡಿ ಅದಕ್ಕೆ ಮಹತ್ವವನ್ನು ಕೊಡದೆ ಹೋದರು.
39ಅವರ ವಿಗ್ರಹಗಳಿಗೋಸ್ಕರ ತಮ್ಮ ಮಕ್ಕಳನ್ನು
ಕೊಂದರು. ಅನಂತರ ಅದೇ ದಿನದಲ್ಲೇ ನನ್ನ ಪವಿತ್ರ
ಆಲಯದೊಳಕ್ಕೆ ಹೋಗಿ ಅದನ್ನು ಹೊಲೆ ಮಾಡಿದರು.
ನನ್ನ ಆಲಯದೊಳಗೆ ಅವರು ಹಾಗೆ ಮಾಡಿದರು.
40‘‘ಅವರು ದೂರ ಪ್ರಾಂತ್ಯಗಳಿಂದ ಪುರುಷರನ್ನು
ಕರಿಸಿದರು. ಅವರಿಗೆ ನೀನು ಸಂದೇಶ ಕಳುಹಿಸಿದಿ. ಅವರು
ನಿನ್ನನ್ನು ನೋಡಲು ಬಂದರು. ಅವರಿಗಾಗಿ ನೀನು ಸ್ನಾನ
ಮಾಡಿ, ನಿನ್ನ ಕಣ್ಣುಗಳಿಗೆ ಕಾಡಿಗೆ ಹಚ್ಚಿ, ನಿನ್ನ ಅಭರಣ
ಗಳನ್ನು ಧರಿಸಿಕೊಂಡಿ. 41ನೀನು ಅಮೋಘವಾದ
ಮಂಚದಲ್ಲಿ ಕುಳಿತುಕೊಂಡೆ. ಅದರ ಮುಂದೆ ಸಿದ್ಧ
ಪಡಿಸಲ್ಪಟ್ಟಿದ್ದ ಮೇಜಿತ್ತು. ಆ ಮೇಜಿನ ಮೇಲೆ ನನ್ನ ಧೂಪ
ಮತ್ತು ಎಣ್ಣೆಯನ್ನು ಇಟ್ಟಿದ್ದೀ.
42‘‘ನಿಶ್ಚಿಂತೆಯುಳ್ಳ ಗುಂಪಿನ ಆನಂದಪೂರ್ಣವಾದ
ಗದ್ದಲವು ಆಕೆಯ ಸುತ್ತಲೂ ಇತ್ತು. ಔತಣಕ್ಕೆ ಅನೇಕರು
ಬಂದರು. ಮರುಭೂಮಿಯ ಕಡೆಯಿಂದ ಜನರು ಬರು
ತ್ತಿರುವಾಗಲೇ ಅಮಲೇರಿಕೊಂಡು ಬಂದರು. ಅವರು
ಬಳೆಗಳನ್ನು, ಸುಂದರವಾದ ಕಿರೀಟಗಳನ್ನೂ ಹೆಂಗಸರಿಗೆ
ಕೊಟ್ಟರು. 43ಆಗ ನಾನು ಅನೈತಿಕ ಜೀವಿತದಲ್ಲಿ ಬತ್ತಿ
ಹೋದ ಒಬ್ಬ ಹೆಂಗಸಿನ ಬಗ್ಗೆ (ನನ್ನೊಳಗೆ),‘ಈಗಲೂ
ಸಹ ಅವರು ಆಕೆಯೊಂದಿಗೆ ಲೈಂಗಿಕ ಪಾಪ ಮಾಡು
ವರೇ?’ ಎಂದುಕೊಂಡೆನು. 44ಆದರೆ ಅವರು ಒಬ್ಬ
ವೇಶ್ಯೆಯ ಬಳಿಗೆ ಹೋಗುವಂತೆಯೇ ಅವರ ಬಳಿಗೆ
ಹೋಗುವಂತೆಯೇ ಅವರ ಬಳಿಗೆ ಹೋದರು. ಹೌದು
ಒಹೊಲ ಮತ್ತು ಒಹೊಲೀಬ ಎಂಬ ಕಾಮುಕ ಸ್ತ್ರೀಯರ
ಬಳಿಗೆ ಅವರು ತಿರುಗಿ ತಿರುಗಿ ಹೋದರು.
45‘‘ನೀತಿವಂತರು ಅವರನ್ನು ವ್ಯಭಿಚಾರ ಮಾಡಿದ
ಮತ್ತು ಕೊಲೆ ಮಾಡಿದ ಅಪರಾಧಿಗಳೆಂದು ತೀರ್ಪು
ನೀಡುವರು. ಯಾಕೆ? ಯಾಕೆಂದರೆ, ಒಹೊಲ ಮತ್ತು
ಒಹೊಲೀಬಳ ವ್ಯಭಿಚಾರವನ್ನು ಆಚರಣೆ ಮಾಡುತ್ತಾರೆ
ಮತ್ತು ರಕ್ತವು ಅವರ ಕೈಗಳ ಮೇಲಿದೆ.’’
46ನನ್ನ ಒಡೆಯನಾದ ಯೆಹೋವನು ನನಗೆ ಹೀಗೆ
ಹೇಳಿದನು, ‘‘ಜನರನ್ನು ಒಟ್ಟುಗೂಡಿಸು. ಅವರು
ಒಟ್ಟಾಗಿ ಸೇರಿ ಒಹೊಲ ಮತ್ತು ಒಹೊಲೀಬರನ್ನು ಶಿಕ್ಷಿ
ಸಲಿ. ಆ ಜನರು ಈ ಸ್ತ್ರೀಯರನ್ನು ಶಿಕ್ಷಿಸಿ ಗೇಲಿ ಮಾಡು
ವರು. 47ಆ ಬಳಿಕ ಜನರ ಗುಂಪು ಅವರ ಮೇಲೆ ಕಲ್ಲೆಸೆದು
ಅವರನ್ನು ಕೊಲ್ಲುವದು. ಆಮೇಲೆ ತಮ್ಮ ಖಡ್ಗಗಳಿಂದ
ಅವರನ್ನು ತುಂಡುತುಂಡು ಮಾಡುವರು. ಅವರ ಮಕ್ಕ
ಳನ್ನು ಕೊಂದು ಅವರ ಮನೆಗಳನ್ನು ಸುಟ್ಟುಹಾಕುವರು.
48ಈ ರೀತಿ, ನಾನು ಅವರ ಅವಮಾನಕರವಾದ ನಡತೆ
ಯನ್ನು ದೇಶದಿಂದ ತೆಗೆದುಹಾಕುವೆನು. ಬೇರೆ ಸ್ತ್ರೀಯರು
ಇಂಥಾ ನಾಚಿಕೆಗೆಟ್ಟ ಕೆಲಸ ಮಾಡಬಾರದೆಂದು ಎಚ್ಚರಿ
ಸುವರು. 49ನಿನ್ನ ನಾಚಿಕೆಕರವಾದ ಕೃತ್ಯಗಳಿಗಾಗಿ ಅವರು
ನಿನ್ನನ್ನು ಶಿಕ್ಷಿಸುವರು. ನೀನು ಅಸಹ್ಯವಾದ ವಿಗ್ರಹಗಳನ್ನು
ಪೂಜೆಮಾಡಿದ್ದಕ್ಕೆ ಶಿಕ್ಷಿಸಲ್ಪಡುವಿ. ಆಗ ನಾನೇ
ಒಡೆಯನೂ ಯೆಹೋವನೂ ಎಂದು ನೀನು
ತಿಳಿಯುವಿ.’’

### ಮಡಕೆ ಮತ್ತು ಮಾಂಸ

24 ನನ್ನ ಒಡೆಯನಾದ ಯೆಹೋವನ ಸಂದೇಶ
ನನಗೆ ಬಂತು. ಇದು ಸೆರೆಹೋದ ಒಂಭತ್ತನೇ
ವರ್ಷದ ಹತ್ತನೇ ತಿಂಗಳಿನ ಹತ್ತನೇ ದಿವಸದಲ್ಲಿ ಆಯಿತು.

ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ, ಈ ಹೊತ್ತಿನ
ದಿವಸವನ್ನೂ ಸಂದೇಶವನ್ನೂ ಬರಿ, ‘ಈ ದಿವಸ
ಬಾಬಿಲೋನ್ ರಾಜನ ಸೈನ್ಯವು ಜೆರುಸಲೇಮಿಗೆ ಮುತ್ತಿಗೆ
ಹಾಕಿತು.’ 3ಈ ವಿಷಯವನ್ನು ವಿಧೇಯರಾಗದ ಆ ಸಂತಾ
ನಕ್ಕೆ ತಿಳಿಸು. ಅವರಿಗೆ ಹೀಗೆ ಹೇಳು, ‘ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ:

‘‘‘ಮಡಕೆಯನ್ನು ಬೆಂಕಿಯ ಮೇಲಿಟ್ಟು ಅದರಲ್ಲಿ
ನೀರು ಹೊಯ್ಯಿ.
4 ಮಾಂಸದ ತುಂಡಗಳನ್ನು ಹಾಕು. ತೊಡೆ ಭುಜ
ಒಳ್ಳೆಯ ಮಾಂಸದ ಭಾಗಗಳನ್ನು ಹಾಕು. ಮಡಕೆ
ಯೊಳಗೆ ಒಳ್ಳೆಯ ಎಲುಬುಗಳನ್ನು ಹಾಕು.
5 ಹಿಂಡಿನಿಂದ ಉತ್ತಮವಾದ ಪಶುವನ್ನು
ತೆಗೆದುಕೊ. ಮಡಕೆಯ ಕೆಳಗೆ ಸೌದೆಗಳನ್ನು
ಜೋಡಿಸು. ಮಾಂಸ ತುಂಡುಗಳನ್ನು ಬೇಯಿಸು.
ಮೂಳೆಗಳನ್ನು ಸಹ ಮಡಕೆಯಲ್ಲಿ ಬೇಯಿಸು.’
6 ನನ್ನ ಒಡೆಯನಾದ ಯೆಹೋವನು ಇಂತೆನ್ನು
ತ್ತಾನೆ: ‘ಕೊಲೆಗಾರರ ಪಟ್ಟಣವಾದ ಜೆರುಸಲೇ
ಮ್‌ಗೆ ಆಪತ್ತು ಬರುವುದು. ಕೊಲೆಗಾರರ ನಗರಕ್ಕೆ
ಕೇಡಾಗುವದು. ಜೆರುಸಲೇಮ್ ಕಿಲುಬು ಹಿಡಿದ
ಪಾತ್ರೆಯಂತಿದೆ. ಆ ಕಿಲುಬಿನ ಕಲೆಯನ್ನು ತೆಗೆಯ
ಲಾಗುವುದೇ ಇಲ್ಲ. ಆ ಪಾತ್ರೆಯು ಅಶುದ್ಧ
ವಾಗಿರುವುದರಿಂದ ಅದರೊಳಗಿರುವ ಮಾಂಸವ
ನ್ನೆಲ್ಲಾ ಹೊರಗೆ ತೆಗೆದುಬಿಡು. ಆ ಮಾಂಸವನ್ನು
ನೀನಾಗಲೀ ಯಾಜಕರಾಗಲೀ ತಿನ್ನಕೂಡದು.
7 ಜೆರುಸಲೇಮು ಕಿಲುಬು ಹಿಡಿದ ಪಾತ್ರೆಯಂತಿದೆ.
ಯಾಕಂದರೆ ಆಕೆ ಸುರಿಸಿದ ಕಲೆಗಳು ಇನ್ನೂ ಇವೆ.
ಆಕೆಯು ಆ ರಕ್ತವನ್ನು ನೆಲದ ಮೇಲೆ ಸುರಿಯದೆ
ಬಂಡೆಯ ಮೇಲೆ ಸುರಿದು ಅದಕ್ಕೆ ಮಣ್ಣನ್ನೂ
ಮುಚ್ಚಲಿಲ್ಲ.
8 ಆಕೆಯು ಸುರಿಸಿದ ರಕ್ತವು ಬರಿದಾದ ಬಂಡೆಯ
ಮೇಲೆ ಮುಚ್ಚಲ್ಪಡದಂತೆ ನಾನೇ ಮಾಡಿದೆನು.
ನಿರಪರಾಧಿಗಳನ್ನು ಆಕೆ ಕೊಂದದ್ದಕ್ಕೆ ಜನರು
ಕೋಪಗೊಂಡು ಆಕೆಯನ್ನು ದಂಡಿಸಲೆಂದು
ನಾನು ಹೀಗೆ ಮಾಡಿದೆನು.’
9 ‘‘ಆದುದರಿಂದ ನನ್ನ ಒಡೆಯನಾದ ಯೆಹೋವನು
ಹೀಗೆನ್ನುತ್ತಾನೆ, ‘ಕೊಲೆಗಾರರಿಂದ ತುಂಬಿದ್ದ
ನಗರಕ್ಕೆ ಕೇಡು ಉಂಟಾಗುವದು. ನಾನು
ಸೌದೆಯ ಗುಡ್ಡೆಯನ್ನು ದೊಡ್ಡದು ಮಾಡುವೆನು.
10 ಮಡಕೆಯಡಿಯಲ್ಲಿ ತುಂಬಾ ಸೌದೆಯನ್ನು ಇಡು.
ಬೆಂಕಿಯನ್ನು ಹಚ್ಚು, ಮಾಂಸವು ಬೇಯುವತನಕ
ಬೇಯಿಸು. ಮೂಳೆಗಳು ಸುಟ್ಟು ಹೋಗಲಿ.
11 ಬರಿದಾದ ಹಂಡೆಯು ಉರಿಯುವ ಕೆಂಡಗಳ
ಮೇಲಿದ್ದು, ಕಾದು ಅದರ ತಾಮ್ರವು ಕೆಂಪಾಗಲಿ.
ಮತ್ತು ಅದರೊಳಗಿರುವ ಕಲೆಗಳು ಕರಗಿ
ಹೋಗಲಿ. ಮತ್ತು ಅದರ ಕಿಲುಬು ಸುಟ್ಟು
ಹೋಗಲಿ.
12 ತನ್ನ ಕಿಲುಬುಗಳ ಕಲೆಯನ್ನು ತೆಗೆಯಲು ಜೆರುಸ
ಲೇಮ್ ತುಂಬಾ ಕಷ್ಟ ಪಡಬಹುದು. ಆದರೆ ಆ
ಕಿಲುಬು ಹೋಗುವದಿಲ್ಲ. ಬೆಂಕಿಯು ಮಾತ್ರ
ಕಿಲುಬನ್ನು ತೆಗೆದುಹಾಕುವುದು.

13 ‘‘‘ನಿನ್ನ ವಿರುದ್ಧ ನನಗಿರುವ ಕೋಪ ತೃಪ್ತಿಗೊಳ್ಳುವ
ತನಕ ನೀನು ಮತ್ತೆಂದಿಗೂ ಶುದ್ಧನಾಗುವುದಿಲ್ಲ.
ನಿನ್ನನ್ನು ತೊಳೆದು ಕಲೆಗಳನ್ನು ತೆಗೆಯಲು ನನಗೆ
ಮನಸ್ಸಿತ್ತು. ಆದರೆ ಕಲೆಗಳು ಹೋಗಲಿಲ್ಲ.
ಆದ್ದರಿಂದ ನಿನ್ನ ಮೇಲಿನ ನನ್ನ ಕೋಪವು ತಣ್ಣಗಾ
ಗುವ ತನಕ ನಾನು ನಿನ್ನನ್ನು ತೊಳೆಯುವುದೇ ಇಲ್ಲ.

14‘‘‘ನಾನೇ ಯೆಹೋವನು. ನಿನಗೆ ಶಿಕ್ಷೆಯು
ಬರುವದು ಎಂದು ನಾನು ಹೇಳಿದರೆ ಅದು ಬರುವಂತೆ
ನಾನು ಮಾಡುವೆನು. ನಾನು ದಂಡನೆಯನ್ನು ತಡೆಹಿಡಿ
ಯುವುದಿಲ್ಲ. ನಾನು ನಿನ್ನನ್ನು ಬಿಟ್ಟುಬಿಡುವುದಿಲ್ಲ. ಅದರ
ಬಗ್ಗೆ ನನ್ನ ಮನಸ್ಸನ್ನು ನಾನು ಮಾರ್ಪಡಿಸುವುದಿಲ್ಲ. ನಿನ್ನ
ಕೆಟ್ಟ ಕಾರ್ಯಗಳಿಗಾಗಿ ನಾನು ನಿನ್ನನ್ನು ಶಿಕ್ಷಿಸುವೆನು.’
ನನ್ನ ಒಡೆಯನಾದ ಯೆಹೋವನು ಇದನ್ನು
ನುಡಿದಿದ್ದಾನೆ.’’

### ಯೆಹೆಜ್ಕೇಲನ ಹೆಂಡತಿಯ ಮರಣ

15ಯೆಹೋವನ ಸಂದೇಶ ನನಗೆ ಬಂತು. ಆತನು
ಹೇಳಿದ್ದೇನೆಂದರೆ, 16‘‘ನರಪುತ್ರನೇ, ನೀನು ನಿನ್ನ ಹೆಂಡತಿ
ಯನ್ನು ಬಹಳವಾಗಿ ಪ್ರೀತಿಸುತ್ತೀ. ಆದರೆ ನಾನು ಆಕೆ
ಯನ್ನು ನಿನ್ನಿಂದ ತೆಗೆದುಬಿಡುವೆನು. ನಿನ್ನ ಹೆಂಡತಿಯು
ಫಕ್ಕನೆ ತೀರಿಹೋಗುವಳು. ಆದರೆ ನೀನು ನಿನ್ನ ದುಃಖ
ವನ್ನು ಪ್ರದರ್ಶಿಸಬಾರದು. ನೀನು ಗಟ್ಟಿಯಾಗಿ ರೋಧಿಸ
ಬಾರದು. ಅಳಬೇಡ ಅಥವಾ ಕಣ್ಣೀರು ಸುರಿಸಬೇಡ.
17ಮೌನವಾಗಿ ನರಳಾಡು. ನಿನ್ನ ಸತ್ತ ಹೆಂಡತಿಗಾಗಿ
ಗಟ್ಟಿಯಾಗಿ ರೋಧಿಸಬೇಡ. ನೀನು ಯಾವಾಗಲೂ
ತೊಡುವ ಬಟ್ಟೆಯನ್ನು ತೊಟ್ಟುಕೋ. ಮುಂಡಾಸವನ್ನು
ಕಟ್ಟಿಕೋ. ಕಾಲಿಗೆ ಕೆರವನ್ನು ಮೆಟ್ಟಿಕೋ, ನಿನ್ನ ದುಃಖ
ವನ್ನು ತೋರಿಸಲು ಮೀಸೆಯನ್ನು ಮುಚ್ಚಿಕೊಳ್ಳಬೇಡ.
ಮರಣದ ಊಟವನ್ನು ಊಟ ಮಾಡದಿರು.’’

18ದೇವರು ಹೇಳಿದ್ದನ್ನು ನಾನು ಮರುದಿವಸ
ಮುಂಜಾನೆ ತಿಳಿಸಿದೆ. ಆ ಸಾಯಂಕಾಲ ನನ್ನ ಪತ್ನಿಯು
ಸತ್ತುಹೋದಳು. ಮರುದಿವಸ ಬೆಳಿಗ್ಗೆ ದೇವರು
ಆಜ್ಞಾಪಿಸಿದ್ದನ್ನೆಲ್ಲ ಮಾಡಿದೆನು. 19ಆಗ ಜನರು ನನ್ನನ್ನು,
‘‘ಇದನ್ನೆಲ್ಲಾ ಯಾಕೆ ಮಾಡುತ್ತೀ? ಇದರರ್ಥವೇನು’’
ಎಂದು ಕೇಳಿದರು.

20ಆಗ ನಾನು ಅವರಿಗೆ ಹೀಗೆಂದೆನು: ‘‘ಯೆಹೋವನ
ಸಂದೇಶ ನನಗೆ ಬಂತು. 21ಆತನು ಹೇಳಿದ್ದೇನೆಂದರೆ :
ಇಸ್ರೇಲ್ ಜನರಿಗೆ ಹೇಳು: ನನ್ನ ಒಡೆಯನಾದ ಯೆಹೋ
ವನು ಇಂತೆನ್ನುತ್ತಾನೆ: ‘ಇಗೋ, ನನ್ನ ಪವಿತ್ರಾಲಯವನ್ನು
ಹಾಳುಮಾಡುವೆನು. ನೀವು ಆ ಸ್ಥಳದ ಬಗ್ಗೆ ಹೆಮ್ಮೆಯುಳ್ಳವ
ರಾಗಿದ್ದು ಸ್ತುತಿಗೀತೆಗಳನ್ನು ಹಾಡುತ್ತೀರಿ. ಅದು ಶಕ್ತಿ
ದೊರಕುವ ಸ್ಥಳ. ನೀವು ಆ ಆಲಯವನ್ನು ನೋಡುತ್ತಾ
ಆನಂದಿಸುತ್ತೀರಿ; ಅದನ್ನು ಬಹಳವಾಗಿ ಪ್ರೀತಿಸುತ್ತೀರಿ.
ಆದರೆ ನಾನು ಅದನ್ನು ಕೆಡವಿ ಬಿಡುವೆನು. ನೀವು ಬಿಟ್ಟು
ಹೋಗುವ ನಿಮ್ಮ ಮಕ್ಕಳು ಯುದ್ಧದಲ್ಲಿ ಸಾಯುವರು.
22ನಾನು ನನ್ನ ಸತ್ತ ಹೆಂಡತಿಗೆ ಮಾಡಿದಂತೆಯೇ ನೀವೂ
ಮಾಡುವಿರಿ. ನಿಮ್ಮ ದುಃಖವನ್ನು ತೋರಿಸಲು ನೀವು
ನಿಮ್ಮ ಮೀಸೆಯನ್ನು ಮುಚ್ಚುವುದಿಲ್ಲ. ಯಾರಾದರೂ
ಸತ್ತಾಗ, ಗೋಳಾಡುವವರು ತಿನ್ನುವ ಆಹಾರವನ್ನು ನೀವು
ತಿನ್ನುವುದಿಲ್ಲ. 23ನೀವು ನಿಮ್ಮ ಮುಂಡಾಸವನ್ನು ಧರಿಸಿ
ಕೊಂಡು ಕಾಲಿಗೆ ಕೆರವನ್ನು ಹಾಕಿಕೊಳ್ಳುವಿರಿ. ನೀವು
ನಿಮ್ಮ ದುಃಖವನ್ನು ತೋರಿಸಿಕೊಳ್ಳುವುದಿಲ್ಲ. ನೀವು
ಅಳುವದೂ ಇಲ್ಲ. ಆದರೆ ನೀವು ನಿಮ್ಮ ಪಾಪಗಳ
ದೆಸೆಯಿಂದ ಕೃಶರಾಗುವಿರಿ. ನೀವು ಒಬ್ಬರಿಗೊಬ್ಬರು
ದುಃಖದ ಶಬ್ದಗಳನ್ನು ಮಾಡುವಿರಿ. 24ಯೆಹೆಜ್ಕೇಲನು
ನಿಮಗೆ ಒಬ್ಬ ಮಾದರಿ . ಆತನು ಮಾಡಿದ ಹಾಗೆ ನೀವೂ
ಮಾಡುವಿರಿ. ನಿಮ್ಮ ಶಿಕ್ಷಾ ಸಮಯವು ಹತ್ತಿರ ಬಂದಿದೆ.
ನಾನು ಒಡೆಯ ನಾದ ಯೆಹೋವನೆಂದು ಆಗ ನೀವು
ತಿಳಿಯುವಿರಿ.’’

25-26‘‘ನರಪುತ್ರನೇ, ನಾನು ಬಲಿಷ್ಠವಾದ ಆಲಯ
ವನ್ನು ಜನರಿಂದ ತೆಗೆದುಬಿಡುವೆನು. ಆ ಸುಂದರ ಸ್ಥಳವು
ಅವರಿಗೆ ಆನಂದವನ್ನು ಕೊಡುತ್ತಿದೆ. ಆ ಸ್ಥಳವನ್ನು
ನೋಡಲು ಅವರು ಆತುರಪಡುವರು. ಆದರೆ ನಾನು
ಆಲಯವನ್ನೂ ಮತ್ತು ಅವರ ಮಕ್ಕಳನ್ನೂ ಆ ಜನರಿಂದ
ತೆಗೆದುಬಿಡುವೆನು. ಆ ದಿನದಂದು, ಪಾರಾದವನು ನಿನ್ನ
ಬಳಿಗೆ ಬಂದು ನಾಶನದ ಕುರಿತಾದ ಕೆಟ್ಟ ಸುದ್ದಿಯನ್ನು
ನಿನಗೆ ತಿಳಿಸುವನು. 27ಆ ಸಮಯದಲ್ಲಿ ನಿನಗೆ ಆ ಮನುಷ್ಯ
ನೊಂದಿಗೆ ಮಾತನಾಡಲಾಗುವುದು. ನೀನು ಆಮೇಲೆ
ಎಂದಿಗೂ ಮೌನವಾಗಿರುವುದಿಲ್ಲ. ಈ ರೀತಿಯಾಗಿ
ನೀನು ಅವರಿಗೆ ಒಂದು ಮಾದರಿಯಾಗುವಿ. ನಾನು
ಯೆಹೋವನೆಂದು ಆಗ ಅವರು ತಿಳಿಯುವರು.’’

## ಅಮ್ಮೋನಿಗೆ ವಿರುದ್ಧವಾದ ಪ್ರವಾದನೆ

25 ಒಡೆಯನಾದ ಯೆಹೋವನ ಮಾತುಗಳು ನನಗೆ
ಬಂದವು. ಆತನು ಹೀಗೆ ಹೇಳಿದನು:
2‘‘ನರಪುತ್ರನೇ, ಅಮ್ಮೋನಿ ಕಡೆಗೆ ಮುಖ ಮಾಡಿ,
ಅವರಿಗೆ ವಿರುದ್ಧವಾಗಿ ಪ್ರವಾದಿಸು. 3ಅಮ್ಮೋನಿಯರಿಗೆ
ಹೀಗೆ ಹೇಳು: ‘ನನ್ನ ಒಡೆಯನಾದ ಯೆಹೋವನ ಮಾತು
ಗಳನ್ನು ಕೇಳಿರಿ. ಆತನು ಹೇಳುವದೇನಂದರೆ, ನನ್ನ
ಪವಿತ್ರಾಲಯವು ಅಪವಿತ್ರಗೊಂಡಾಗಲೂ ಇಸ್ರೇಲ್
ದೇಶವು ನಾಶವಾದಾಗಲೂ ಯೆಹೂದದ ಜನರು ಸೆರೆ
ಒಯ್ಯಲ್ಪಟ್ಟಾಗಲೂ ನೀವು ಸಂತೋಷಪಟ್ಟಿರಿ. 4ಆದಕ್ಕಾಗಿ
ನಾನು ನಿಮ್ಮನ್ನು ಪೂರ್ವದ ಜನರಿಗೆ ಬಿಟ್ಟುಕೊಡುವೆನು.
ಅವರು ಬಂದು ನಿಮ್ಮ ದೇಶವನ್ನು ಕಿತ್ತುಕೊಳ್ಳುವರು.
ಅವರ ಸೈನ್ಯವು ಬಂದು ನಿಮ್ಮ ದೇಶದೊಳಗೆ ಪಾಳೆಯ
ಮಾಡುವದು. ಅವರು ನಿಮ್ಮ ಮಧ್ಯದಲ್ಲಿ ವಾಸಿಸಿ ನಿಮ್ಮ
ಹಣ್ಣುಗಳನ್ನು ತಿಂದು ನಿಮ್ಮ ಹಾಲನ್ನು ಕುಡಿಯುವರು.

5‘‘‘ನಾನು ರಬ್ಬಾ ನಗರವನ್ನು ಒಂಟೆಗಳು ಮೇಯುವ
ಸ್ಥಳವನ್ನಾಗಿಯೂ, ಅಮ್ಮೋನ್ ದೇಶವನ್ನು ಕುರಿಹಟ್ಟಿಯ
ನ್ನಾಗಿಯೂ ಮಾಡುವೆನು. ಆಗ ನಾನು ಯೆಹೋವ
ನೆಂದು ನಿಮಗೆ ಗೊತ್ತಾಗುವದು. 6ಯೆಹೋವನು ಹೇಳು
ವದೇನಂದರೆ: ಜೆರುಸಲೇಮ್ ನಾಶವಾಯಿತೆಂದು ನೀವು
ಸಂತೋಷಪಟ್ಟಿರಿ ನೀವು ಚಪ್ಪಾಳೆ ತಟ್ಟಿ ಕಾಲಿನಿಂದ
ನೆಲವನ್ನು ಬಡಿದಿರಿ. ಇಸ್ರೇಲ್ ದೇಶವನ್ನು ಕಡೆಗಣಿಸಿ
ನಗಾಡಿದಿರಿ. 7ಅದಕ್ಕಾಗಿ ನಾನು ನಿಮ್ಮನ್ನು ದಂಡಿಸುವೆನು.
ಜನಾಂಗಗಳಿಂದ ನಿಮ್ಮನ್ನು ಕೊಳ್ಳೆ ಹೊಡೆಸಿ ನಿರ್ಮೂಲ
ಮಾಡುವೆನು. ದೇಶಗಳೊಳಗಿಂದ ನಿಮ್ಮ ಹೆಸರನ್ನು ಅಳಿಸಿ
ಹಾಕುವೆನು; ನಿಮ್ಮನ್ನು ನಾಶಮಾಡುವೆನು. ನಾನೇ
ಯೆಹೋವನೆಂಬುದು ಆಗ ನಿಮಗೆ ತಿಳಿಯುವುದು.’’’

## ಮೋವಾಬ್ ಮತ್ತು ಸೇಯೀರ್ ವಿರುದ್ಧ ಪ್ರವಾದನೆ

8ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘‘ಮೋವಾಬ್, ‘ಯೆಹೂದ ಜನಾಂಗದವರು ಇತರ
ಎಲ್ಲಾ ಜನಾಂಗಗಳವರಂತಿದ್ದಾರೆ.’ ಎಂದು ಹೇಳುತ್ತಿದೆ.
9ಮೋವಾಬಿನ ಗಡಿಯನ್ನು ಸಂರಕ್ಷಿಸುತ್ತಿರುವ ಪಟ್ಟಣ
ಗಳು ಆಕ್ರಮಣಕ್ಕೆ ಗುರಿಯಾಗುವಂತೆ ಮಾಡುತ್ತೇನೆ.
ಬೇತ್‌ಯೆಷೀಮೋತ್, ಬಾಳ್‌ಮೆಯೋನ್, ಕಿರ್ಯಾತ
ಯಿಮ್, ಅದರ ವೈಭವಯುತನಾದ ಸರಹದ್ದಿನ ಪಟ್ಟಣ
ಗಳನ್ನು ನಾನು ತೆಗೆದುಹಾಕುವೆನು. 10ಪೂರ್ವದಿಕ್ಕಿನ
ಜನರು ಮೋವಾಬನ್ನೂ ಅಮ್ಮೋನನ್ನೂ ಗೆದ್ದುಕೊಳ್ಳು
ವಂತೆ ನಾನು ಮಾಡುವೆನು. ಆಗ ಜನರು ಮೋವಾಬಿನ
ವರನ್ನು ಮರೆತುಬಿಡುವರು. 11ಹೀಗೆ ನಾನು ಮೋವಾ
ಬನ್ನು ಶಿಕ್ಷಿಸುವೆನು. ಆಗ ನಾನೇ ಯೆಹೋವನೆಂದು
ಅವರು ತಿಳಿಯುವರು.’’

### ಎದೋಮ್ ವಿರುದ್ಧವಾದ ಪ್ರವಾದನೆಗಳು

[12]ನನ್ನ ಒಡೆಯನಾದ ಯೆಹೋವನು ಹೀಗೆ ಹೇಳು
ತ್ತಾನೆ: ''ಎದೋಮ್ಯರು ಯೆಹೂದದ ಜನರ ಮೇಲೆ
ಕ್ರೂರವಾದ ಸೇಡನ್ನು ತೀರಿಸಿಕೊಂಡಿದ್ದಾರೆ. ಅವರ
ಮೇಲೆ ಸತತವಾಗಿ ಸೇಡುತೀರಿಸಿಕೊಳ್ಳುವುದರ ಮೂಲಕ
ಎದೋಮ್ಯರು ಮಹಾ ಅಪರಾಧ ಮಾಡಿದ ದೋಷಿಗ
ಳಾಗಿದ್ದಾರೆ.'' [13]ಆದುದರಿಂದ ನನ್ನ ಒಡೆಯನಾದ
ಯೆಹೋವನು ಹೇಳುವದೇನೆಂದರೆ, ''ನಾನು ಎದೋ
ಮನ್ನು ಶಿಕ್ಷಿಸುವೆನು. ಎದೋಮಿನ ಜನರನ್ನೂ ಪ್ರಾಣಿ
ಗಳನ್ನೂ ನಾಶಮಾಡುವೆನು. ತೇಮಾನಿನಿಂದ ಹಿಡಿದು
ದೆದಾನ್ ತನಕ ಆ ದೇಶವನ್ನೆಲ್ಲಾ ನಾಶಮಾಡುವೆನು.
ಎದೋಮ್ಯರು ರಣರಂಗದಲ್ಲಿ ಸಾಯುವರು. [14]ನಾನು
ನನ್ನ ಇಸ್ರೇಲ್ ಜನವನ್ನು ಉಪಯೋಗಿಸಿ ಎದೋಮ್ಯರಿಗೆ
ಮುಯ್ಯಿ ತೀರಿಸುವೆನು. ಈ ರೀತಿಯಾಗಿ ಎದೋಮಿನ
ಮೇಲಿರುವ ನನ್ನ ಕೋಪವನ್ನು ಇಸ್ರೇಲರು ಅವರಿಗೆ
ತೋರಿಸುವರು. ಆಗ ಎದೋಮ್ಯರು ನಾನು ಅವರನ್ನು
ಶಿಕ್ಷಿಸಿದ್ದೇನೆಂದು ತಿಳಿದುಕೊಳ್ಳುವರು.'' ಇದು ನನ್ನ
ಒಡೆಯನಾದ ಯೆಹೋವನ ವಾಕ್ಯ.

### ಫಿಲಿಷ್ಟಿಯರ ವಿರುದ್ಧವಾದ ಪ್ರವಾದನೆಗಳು

[15]ನನ್ನ ಒಡೆಯನಾದ ಯೆಹೋವನು ಹೀಗೆ ಹೇಳಿ
ದ್ದಾನೆ, ''ಫಿಲಿಷ್ಟಿಯರು ಸೇಡನ್ನು ತೀರಿಸಿಕೊಂಡಿದ್ದಾರೆ.
ಅವರು ಆವೇಶದಿಂದ ತಿರಸ್ಕರಿಸಿ ಸೇಡನ್ನು ತೀರಿಸಿ
ಕೊಂಡಿದ್ದಾರೆ. ಅವರು ತಮ್ಮ ದೀರ್ಘಕಾಲದ ದ್ವೇಷ
ದಿಂದ ನಾಶವು ಬರುವಂತೆ ಮಾಡಿದ್ದಾರೆ.'' [16]ಆದುದ
ರಿಂದ ನನ್ನ ಒಡೆಯನಾದ ಯೆಹೋವನು ಹೇಳಿದ್ದೇ
ನೆಂದರೆ, ''ನಾನು ಫಿಲಿಷ್ಟಿಯರನ್ನು ಶಿಕ್ಷಿಸುವೆನು, ಹೌದು,
ಕೆರೇತದ ಆ ಜನರನ್ನು ನಾಶಮಾಡುವೆನು. ಸಮುದ್ರ
ಕರಾವಳಿಯಲ್ಲಿ ವಾಸಿಸುವ ಉಳಿದ ಜನರನ್ನೆಲ್ಲಾ ನಾಶ
ಮಾಡುವೆನು. [17]ನಾನು ಅವರೊಂದಿಗೆ ಮುಯ್ಯಿ ತೀರಿಸಿ
ಕೊಳ್ಳುವೆನು. ನನ್ನ ಕೋಪವು ಅವರಿಗೆ ಪಾಠ ಕಲಿಸುವದು.
ನಾನು ಯೆಹೋವನೆಂದು ಆಗ ಅವರು ತಿಳಿದು
ಕೊಳ್ಳುವರು.''

### ತೂರಿನ ಬಗ್ಗೆ ದುಃಖಕರವಾದ ವಾರ್ತೆ

26 ದೇಶಭ್ರಷ್ಟರಾಗಿದ್ದ ಹನ್ನೊಂದನೇ ವರ್ಷದ
ತಿಂಗಳ ಮೊದಲನೇ ದಿವಸದಲ್ಲಿ ಯೆಹೋವನ
ಸಂದೇಶ ನನಗೆ ಬಂತು. ಆತನು ಹೇಳಿದ್ದೇನೆಂದರೆ,
[2]''ನರಪುತ್ರನೇ, ಜೆರುಸಲೇಮ್ ಬಗ್ಗೆ ತೂರ್ ಕೆಟ್ಟ
ಮಾತುಗಳನ್ನಾಡಿದೆ. 'ಜನರನ್ನು ಸುರಕ್ಷಿತವಾಗಿರಿಸುವ
ನಗರ ದ್ವಾರವು ಕೆಡವಲ್ಪಟ್ಟು ದ್ವಾರವೇ ಇಲ್ಲದಂತಾಗಿದೆ.
ನಗರವು ಹಾಳಾಗಿರುವುದರಿಂದ ಕೊಳ್ಳೆ ಹೊಡೆಯಲು
ಸುಲಭವಾಯಿತು' ಎಂದು ಅದು ಅಂದುಕೊಂಡಿದೆ.''

[3]ಆದುದರಿಂದ ನನ್ನ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ: ''ತೂರೇ, ನಾನು ನಿನಗೆ ಮುಯ್ಯಿ ತೀರಿಸು
ವೆನು. ನಿನಗೆ ವಿರುದ್ಧವಾಗಿ ಯುದ್ಧ ಮಾಡಲು ಅನೇಕ
ರಾಜ್ಯಗಳನ್ನು ಎಬ್ಬಿಸುತ್ತೇನೆ. ಅವರು ಸಮುದ್ರದ ತೆರೆ
ಯಂತೆ ಮೇಲಿಂದ ಮೇಲೆ ನಿನಗೆ ವಿರುದ್ಧವಾಗಿ
ಬರುವರು.''

[4]ದೇವರು ಹೇಳಿದ್ದೇನೆಂದರೆ, ''ಆ ಶತ್ರುಸೈನಿಕರು
ತೂರಿನ ಗೋಡೆಗಳನ್ನು ಕೆಡವಿ, ಅದರ ಬುರುಜುಗಳನ್ನು
ಎಳೆದುಹಾಕುವರು. ನಾನು ಅದರ ಫಲವತ್ತಾದ ಮಣ್ಣನ್ನು
ಕೆರೆದು ಹಾಕಿ, ಅದನ್ನು ಬರಿದಾದ ಬಂಡೆಯನ್ನಾಗಿ ಬಿಟ್ಟು
ಬಿಡುವೆನು. [5]ಬೆಸ್ತರು ತಮ್ಮ ಬಲೆಗಳನ್ನು ಹರಡಿ ಒಣ
ಗಿಸುವ ಸ್ಥಳವನ್ನಾಗಿ ಮಾಡುವೆನು. ಇದು ನನ್ನ ನುಡಿ.''
ನನ್ನ ಒಡೆಯನಾದ ಯೆಹೋವನು ಹೀಗೆ ಹೇಳುತ್ತಾನೆ,
''ಸೈನಿಕರು ಯುದ್ಧದ ಸಮಯದಲ್ಲಿ ಬೆಳೆಬಾಳುವ ವಸ್ತು
ವನ್ನು ಕೊಳ್ಳೆ ಮಾಡುವಂತೆ ತೂರ್ ಇದೆ. [6]ಆಕೆಯ ಹೆಣ್ಣು
ಮಕ್ಕಳು (ಚಿಕ್ಕ ಪಟ್ಟಣಗಳು) ಯುದ್ಧದಲ್ಲಿ ಕೊಲ್ಲಲ್ಪಡು
ವರು. ನಾನು ಯೆಹೋವನೆಂದು ಆಗ ತಿಳಿಯುವರು.''

### ನೆಬೂಕದ್ನೆಚ್ಚರನು ತೂರಿನ ಮೇಲೆ ಧಾಳಿ ಮಾಡುವನು

[7]ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ಉತ್ತರ ದಿಕ್ಕಿನಿಂದ ಒಬ್ಬ ಶತ್ರುವನ್ನು ನಾನು ತೂರಿಗೆ
ವಿರುದ್ಧವಾಗಿ ಬರಮಾಡುವೆನು. ಅವನೇ ಬಾಬಿಲೋನಿನ
ರಾಜನಾದ ನೆಬೂಕದ್ನೆಚ್ಚರನು. ಅವನು ಲೆಕ್ಕವಿಲ್ಲದಷ್ಟು
ಕುದುರೆ ಸವಾರರು, ರಥಗಳು ಕಾಲ್ಬಲವುಳ್ಳ ದೊಡ್ಡ ಸೈನ್ಯ
ವನ್ನು ತೆಗೆದುಕೊಂಡು ಬರುವನು. ಅವನ ಸೈನಿಕರೆಲ್ಲಾ
ಬೇರೆಬೇರೆ ಜನಾಂಗದವರು. [8]ನೆಬೂಕದ್ನೆಚ್ಚರನು ನಿನ್ನ
ಹೆಣ್ಣು ಮಕ್ಕಳನ್ನು (ಚಿಕ್ಕ ಪಟ್ಟಣಗಳನ್ನು) ಕೊಲ್ಲುವನು.
ಅವನು ಬುರುಜುಗಳನ್ನು ಕಟ್ಟಿ ನಿನ್ನ ನಗರವನ್ನು ಧಾಳಿ
ಮಾಡುವನು. ನಿನ್ನ ನಗರದ ಸುತ್ತಲೂ ಮಣ್ಣಿನ ಮಾರ್ಗ
ಮಾಡುವನು. ಕೋಟೆಗೋಡೆಯ ತನಕ ರಸ್ತೆಯನ್ನು
ತಯಾರಿಸುವನು. [9]ಅವನು ಮರದ ತೊಲೆಗಳನ್ನು ತಂದು
ನಿನ್ನ ಗೋಡೆಗಳನ್ನು ಕೆಡವಿಬಿಡುವನು. ಗುದ್ದಲಿಗಳಿಂದ
ನಿನ್ನ ಬುರುಜುಗಳನ್ನು ಕೆಡವಿ ಹಾಕುವನು. [10]ಅವನ
ಕುದುರೆಗಳ ಗೊರಸುಗಳಿಂದ ಹೊರಟ ಧೂಳು ನಿನ್ನನ್ನು
ಮುಚ್ಚಿಬಿಡುವದು. ಅವರ ರಥ, ಗಾಡಿ ಕುದುರೆಗಳ
ಶಬ್ದದಿಂದ ನಿನ್ನ ಗೋಡೆಗಳು ನಡುಗುವವು. ಕೋಟೆ
ಗೋಡೆಗಳು ಕೆಡವಲ್ಪಡುವದರಿಂದ ಅವರು ನಗರ
ದೊಳಗೆ ನುಗ್ಗುವರು. [11]ಬಾಬಿಲೋನಿನ ರಾಜನು ಕುದು
ರೆಯ ಮೇಲೆ ಕುಳಿತುಕೊಂಡು ನಿಮ್ಮ ನಗರದೊಳಗೆ
ಪ್ರವೇಶಮಾಡುವನು. ನಿಮ್ಮ ರಸ್ತೆಯ ಮೇಲೆ ಅವನ
ಕುದುರೆಯ ಗೊರಸು ಶಬ್ದವೇರಿಸುವದು. ನಿಮ್ಮನ್ನು ತನ್ನ
ಖಡ್ಗದಿಂದ ಸಂಹರಿಸುವನು. ನಿಮ್ಮ ನಗರದಲ್ಲಿನ ಉನ್ನತ

ಸ್ತಂಭಗಳು ಕೆಡವಲ್ಪಡುವವು. [12]ನೆಬೂಕದ್ನೆಚ್ಚರನ
ಸೈನ್ಯವು ನಿಮ್ಮ ಐಶ್ವರ್ಯವನ್ನು ದೋಚಿಕೊಳ್ಳುವದು.
ನೀವು ಮಾರಬೇಕೆಂದಿದ್ದ ವಸ್ತುಗಳನ್ನು ಅವರು ದೋಚಿ
ಕೊಳ್ಳುವರು. ನಿಮ್ಮ ಗೋಡೆಗಳನ್ನು ಒಡೆದು ಅಂದವಾದ
ನಿಮ್ಮ ಮನೆಗಳನ್ನು ಹಾಳು ಮಾಡುವರು. ನಿಮ್ಮ ಮರ
ದಿಂದ ಮತ್ತು ಕಲ್ಲುಗಳಿಂದ ಮಾಡಿದ ಮನೆಗಳನ್ನು
ಕಸದಂತೆ ಸಮುದ್ರಕ್ಕೆ ಎಸೆಯುವರು. [13]ನಿನ್ನ ಸಂತಸದ
ಹಾಡುಗಳನ್ನು ನಾನು ನಿಲ್ಲಿಸಿಬಿಡುವೆನು. ನಿನ್ನ ಕಿನ್ನರಿ
ಸ್ವರವನ್ನು ಜನರು ಇನ್ನೆಂದೂ ಕೇಳರು. [14]ನಾನು ನಿನ್ನನ್ನು
ಬರಿದಾದ ಬಂಡೆಯನ್ನಾಗಿ ಮಾಡುವೆನು. ಸಮುದ್ರದ
ತೀರದಲ್ಲಿ ಬಲೆಗಳನ್ನು ಹರಡುವ ಸ್ಥಳವಾಗಿ ನೀನು
ಮಾರ್ಪಡುವಿ. ನೀನು ತಿರುಗಿ ಕಟ್ಟಲ್ಪಡುವದಿಲ್ಲ. ಇದು
ಒಡೆಯನಾದ ಯೆಹೋವನ ನುಡಿ.'' ನನ್ನ ಒಡೆಯನಾದ
ಯೆಹೋವನು ಇದನ್ನು ನನಗೆ ತಿಳಿಸಿದನು.

### ಬೇರೆ ದೇಶಗಳವರು ತೂರಿಗಾಗಿ ಅಳುವರು

[15]ಒಡೆಯನಾದ ಯೆಹೋವನು ತೂರಿಗೆ ಹೇಳುವದೇ
ನೆಂದರೆ, ''ಭೂಮಧ್ಯ ಸಮುದ್ರ ಕರಾವಳಿಯಲ್ಲಿರುವ
ದೇಶದವರು ನೀನು ಕೆಳಗೆ ಬೀಳುವ ಶಬ್ದ ಕೇಳಿ ನಡುಗು
ವರು. ಅದು ನಿನ್ನ ಜನರು ಗಾಯಗೊಂಡು ಸಾಯುವಾಗ
ಆಗುವದು. [16]ಆಗ ಸಮುದ್ರ ತೀರದ ದೇಶಗಳ ನಾಯಕ
ರೆಲ್ಲಾ ತಮ್ಮ ಸಿಂಹಾಸನದಿಂದ ಕೆಳಗಿಳಿದು ತಮ್ಮ ಶೋಕ
ವನ್ನು ವ್ಯಕ್ತಪಡಿಸುವರು. ಅವರು ತಮ್ಮ ಸುಂದರವಾದ
ರಾಜವಸ್ತ್ರಗಳನ್ನು ತೆಗೆದಿಟ್ಟು ಭಯದ ಬಟ್ಟೆಗಳನ್ನು ಧರಿಸಿ
ಕೊಂಡು ನೆಲದ ಮೇಲೆ ಭಯದಿಂದ ಕುಳಿತು
ಕೊಳ್ಳುವರು. ನೀನು ಎಷ್ಟು ಬೇಗನೇ ನಾಶವಾದೆ ಎಂದು
ಕೇಳಿ ದಂಗು ಬಡಿದಂತಾಗುವರು. [17]ಅವರು ನಿನ್ನ ಬಗ್ಗೆ
ಈ ಶೋಕ ಗೀತೆಯನ್ನು ಹಾಡುವರು:

'''ತೂರ್, ನೀನು ಹೆಸರುವಾಸಿಯಾದ ನಗರ
ವಾಗಿದ್ದೆ. ನಿನ್ನಲ್ಲಿ ವಾಸಮಾಡಲು ಜನರು ಸಮುದ್ರ
ದಾಚೆಯಿಂದ ಬಂದರು. ನೀನು ಪ್ರಸಿದ್ಧಳಾಗಿದ್ದೆ.
ಆದರೆ ನೀನೀಗ ಹೋಗಿಬಿಟ್ಟೆ. ದ್ವೀಪವಾಗಿರುವ
ನೀನು ಮತ್ತು ನಿನ್ನಲ್ಲಿ ವಾಸವಾಗಿದ್ದ ಜನರು
ಸಮುದ್ರದಿಂದ ದೂರದಲ್ಲಿರುವುದರಿಂದ ಬಲಿಷ್ಠ
ರಾಗಿದ್ದೀರಿ. ಭೂಮಿಯ ಮೇಲೆ ವಾಸವಾಗಿದ್ದ
ಎಲ್ಲಾ ಜನರನ್ನು ನೀವು ಭಯಗೊಳಿಸಿದಿರಿ.

18 ನೀನು ಬಿದ್ದ ದಿವಸ ಕರಾವಳಿಯಲ್ಲಿರುವ ದೇಶಗ
ಳೆಲ್ಲಾ ನಡುಗುವವು. ನೀನು ಕರಾವಳಿಯಲ್ಲಿ
ಅನೇಕ ವಸಾಹತುಗಳನ್ನು ನಿರ್ಮಿಸಿದ್ದೀ. ನೀನು
ಹೋದ ಬಳಿಕ ಅವರು ಭಯಗ್ರಸ್ತರಾಗುವರು.'''

[19]ಇದು ನನ್ನ ಒಡೆಯನಾದ ಯೆಹೋವನ ನುಡಿ.
''ತೂರ್, ನಾನು ನಿನ್ನನ್ನು ನಾಶಮಾಡುವೆನು. ಆಗ ನೀನು
ಬರಿದಾದ ನಗರವಾಗಿರುವಿ. ಯಾರೂ ಅಲ್ಲಿ ವಾಸ
ಮಾಡುವದಿಲ್ಲ. ನಿನ್ನ ಮೇಲೆ ಸಮುದ್ರವು ತುಂಬುವಂತೆ
ಮಾಡುವೆನು. ಆ ಮಹಾ ಸಾಗರವು ನಿನ್ನನ್ನು ಮುಚ್ಚಿ
ಬಿಡುವದು. [20]ಆಳವಾದ ಗುಂಡಿಗೆ, ಸತ್ತವರು ಹೋಗುವ
ಸ್ಥಳಕ್ಕೆ ನಿನ್ನನ್ನು ಕಳುಹಿಸುವೆನು. ಬೇರೆ ಹಳೇ ನಗರಗಳಂತೆ
ನಾನು ಭೂಮಿಯ ಕೆಳಗೆ ನಿನ್ನನ್ನು ಕಳುಹಿಸಿಬಿಡುವೆನು.
ಸಮಾಧಿಯೊಳಗಿರುವವರೊಂದಿಗೆ ನೀನು ಇರುವಿ.
ನಿನ್ನಲ್ಲಿ ಆಗ ಯಾರೂ ವಾಸ ಮಾಡುವದಿಲ್ಲ. ನೀನು
ಎಂದಿಗೂ ಜೀವಿಸುವವರ ಲೋಕದಲ್ಲಿರುವದಿಲ್ಲ.
[21]ನಿನಗಾದ ಸ್ಥಿತಿಯನ್ನು ನೋಡಿ ಬೇರೆ ಜನರು ಭಯ
ಗ್ರಸ್ತರಾಗುವರು. ನಿನ್ನ ಅಂತ್ಯವು ಆಯಿತು. ಜನರು
ನಿನಗಾಗಿ ಹುಡುಕಾಡುವರು. ಆದರೆ ಅವರು ನಿನ್ನನ್ನು
ಕಂಡು ಹಿಡಿಯುವುದೇ ಇಲ್ಲ.'' ಇವು ಒಡೆಯನಾದ
ಯೆಹೋವನ ಮಾತು.

### ತೂರ್ ಒಂದು ದೊಡ್ಡ ವಾಣಿಜ್ಯ ಕೇಂದ್ರ

27 ಯೆಹೋವನ ವಾಕ್ಯವು ನನಗೆ ತಿರುಗಿ ಬಂತು.
ಆತನು ಹೇಳಿದ್ದೇನೆಂದರೆ, [2]''ನರಪುತ್ರನೇ,
ತೂರಿನ ವಿಷಯವಾದ ಶೋಕಗೀತೆಯನ್ನು ಹಾಡು.
[3]ಅದರ ಬಗ್ಗೆ ಈ ರೀತಿಯಾಗಿ ಹೇಳು:

'''ತೂರೇ, ನೀನು ಸಮುದ್ರಕ್ಕೆ ಬಾಗಿಲು. ಅನೇಕ
ದೇಶಗಳಿಗೆ ನೀನು ವ್ಯಾಪಾರಿ. ಕರಾವಳಿಯ
ಅನೇಕ ದೇಶಗಳಿಗೆ ನೀನು ಪ್ರಯಾಣಿಸುವಿ.' ನನ್ನ
ಒಡೆಯನಾದ ಯೆಹೋವನು ಇದನ್ನು ಹೇಳಿ
ದ್ದಾನೆ. 'ತೂರೇ, ನೀನು ಅತಿ ಸುಂದರಿಯೆಂದು
ಭಾವಿಸಿದ್ದೀ. ನೀನು ಪರಿಪೂರ್ಣ ಸುಂದರಿ
ಯೆಂದು ತಿಳಿದಿದ್ದೀ.

4 ಭೂಮಧ್ಯ ಸಮುದ್ರವು ನಿನ್ನ ಸುತ್ತಲೂ ಮೇರೆ
ಯಂತಿದೆ. ನಿನ್ನನ್ನು ಕಟ್ಟಿದವರು ಅಂದವಾಗಿಯೇ
ಕಟ್ಟಿದರು. ನಿನ್ನಿಂದ ಹೊರಡುವ ಹಡಗುಗಳಂತೆ
ನೀನು ಸುಂದರವಾಗಿದ್ದೀ.

5 ನಿನ್ನ ಬಡಗಿಯವರು ಸೆನೀರ್ ಬೆಟ್ಟದ ತುರಾಯಿ
ಮರಗಳ ಹಲಗೆಗಳನ್ನು ಉಪಯೋಗಿಸಿದರು,
ಲೆಬನೋನಿನ ದೇವದಾರು ಮರವನ್ನು ಹಾಯಿ
ಮರವನ್ನಾಗಿ ಉಪಯೋಗಿಸಿದರು.

6 ಬಾಷಾನಿನ ಅಲ್ಲೋನ್ ಮರಗಳಿಂದ ಹುಟ್ಟು
ಗಳನ್ನು ತಯಾರಿಸಿದರು. ನಿನ್ನ ಮೇಲ್ಮಾಳಿಗೆ
ಯನ್ನು ಕಿತ್ತೀಮ್ ದ್ವೀಪದ ತಿಲಕದ ಮರಗ
ಳಿಂದ ಮಾಡಿದರು. ಅದನ್ನು ದಂತಗಳಿಂದ
ಶೃಂಗರಿಸಿದರು.

7 ಈಜಿಪ್ಟಿನಲ್ಲಿ ತಯಾರಿಸಿದ ಬಣ್ಣದ ನಾರು
ಮಡಿಯನ್ನು ನಿನ್ನ ಹಾಯಿಗಳಿಗಾಗಿ

ಉಪಯೋಗಿಸಿದರು. ಆ ಹಾಯಿಯ ನಿನ್ನ ಧ್ವಜ
ವಾಯಿತು. ನಿನ್ನ ಮೇಲ್ಮಾಳಿಗೆಯ ಹೊದಿಕೆಯು
ನೀಲ ಮತ್ತು ಧೂಮ್ರ ವರ್ಣದವುಗಳಾಗಿದ್ದವು.
ಅವು ಸೈಪ್ರಸ್* ದ್ವೀಪದಿಂದ ಬಂದವುಗ
ಳಾಗಿದ್ದವು.
8 ಚೇದೋನ್ ಮತು ಅರ್ವಾದಿನ ಜನರು ನಿನ್ನ
ಹಡಗುಗಳಿಗೆ ಹುಟ್ಟುಹಾಕುವವರಾಗಿದ್ದರು.
ತೂರೇ, ನಿನ್ನ ಜ್ಞಾನಿಗಳು ಹಡಗುಗಳನ್ನು ನಡಿಸುವ
ವರಾಗಿದ್ದರು.
9 ಗೆಬಲಿನ ಹಿರಿಯರೂ ಜ್ಞಾನಿಗಳೂ ನಿನ್ನ ಹಡಗು
ಗಳ ಬಿರುಕುಗಳನ್ನು ರಿಪೇರಿ ಮಾಡುವವರಾ
ದರು. ಸಾಗರದ ಹಡಗುಗಳೂ ಅದರ ನಾವಿಕರೂ
ನಿನ್ನೊಂದಿಗೆ ವ್ಯಾಪಾರ ಮಾಡಲು ಬಂದರು.

10‘‘ಪರ್ಶಿಯ, ಲೂದ್ ಮತ್ತು ಪೂಟ್‌ನ ಜನರು ನಿನ್ನ
ಸೈನ್ಯದಲ್ಲಿರುವವರು. ಅವರು ಯುದ್ಧವೀರರು. ಅವರು ನಿನ್ನ
ಗೋಡೆಗಳಲ್ಲಿ ತಮ್ಮ ಗುರಾಣಿ ಮತ್ತು ಶಿರಶಾಸ್ತ್ರಣಗಳನ್ನು
ತೂಗುಹಾಕಿದರು. ನಿನ್ನ ನಗರಕ್ಕೆ ಘನತೆಯನ್ನು ಅವರು
ತಂದರು. 11ಅರ್ವಾದ್ ಮತ್ತು ಸಿಲಿಸಿಯಾದ ಜನರು ನಿನ್ನ
ಕೋಟೆಗೋಡೆಗಳಲ್ಲಿ ಕಾವಲಿಗಿರುವವರು. ಗಮ್ಮಾದಿನಿಂದ
ಬಂದ ಜನರು ನಿನ್ನ ಬುರುಜುಗಳಲ್ಲಿರುವವರು. ನಿನ್ನ
ಸೌಂದರ್ಯವನ್ನು ಅವರು ಪರಿಪೂರ್ಣ ಮಾಡಿದರು.
12‘‘ತಾರ್ಷೀಷ್ ನಿನ್ನ ಉತ್ತಮ ವ್ಯಾಪಾರ ಕೇಂದ್ರ
ವಾಗಿತ್ತು. ಅವರು ತಮ್ಮ ಬೆಳ್ಳಿ ಕಬ್ಬಿಣ, ತವರ, ಮತ್ತು ಸೀಸ
ಲೋಹಗಳನ್ನು ಕೊಟ್ಟು ನಿನ್ನಿಂದ ವಸ್ತುಗಳನ್ನು ಕೊಂಡು
ಕೊಂಡರು. 13ಗ್ರೀಸ್, ತುರ್ಕಿ ಮತ್ತು ಕಪ್ಪು ಸಮುದ್ರದ
ಸುತ್ತಲಿರುವ ದೇಶಗಳವರು ನಿನ್ನಲ್ಲಿಗೆ ವ್ಯಾಪಾರಕ್ಕಾಗಿ
ಬಂದರು. ಅವರು ನಿನ್ನ ವಸ್ತುಗಳಿಗೆ ಬದಲಾಗಿ ಗುಲಾಮ
ರನ್ನೂ ತಾಮ್ರವನ್ನೂ ಕೊಟ್ಟರು. 14ತೋಗರ್ಮ ದೇಶದ
ಜನರು ನೀನು ಮಾರುವ ವಸ್ತುಗಳಿಗೆ ಕುದುರೆ, ಯುದ್ಧದ
ಕುದುರೆಗಳು, ಹೇಸರಕತ್ತೆಗಳನ್ನು ಬದಲಿ ಕೊಟ್ಟರು.
15ರೋಧೆ ದ್ವೀಪದ ಜನರು ನಿನ್ನೊಂದಿಗೆ ವ್ಯಾಪಾರ
ಮಾಡಿದರು. ನೀನು ಅನೇಕ ಕಡೆಗಳಲ್ಲಿ ವ್ಯಾಪಾರ
ಮಾಡಿದಿ. ಜನರು ದಂತವನ್ನೂ ಬೀಟೆ ಮರಗಳನ್ನೂ
ತಂದು ನಿನ್ನೊಂದಿಗೆ ವ್ಯಾಪಾರ ಮಾಡಿದರು. 16ನಿನ್ನಲ್ಲಿ
ಅನೇಕ ಬೆಲೆಬಾಳುವ ವಸ್ತುಗಳಿದ್ದುದರಿಂದ ಅರಾಮ್
ನಿನ್ನೊಂದಿಗೆ ವ್ಯಾಪಾರ ಮಾಡಿತು. ಅವರು ಇಂದ್ರನೀಲ,
ಧೂಮ್ರ ಬಣ್ಣದ ಬಟ್ಟೆ, ಕಸೂತಿ ಕೆಲಸ, ನಯವಾದ ಬಟ್ಟೆ,
ಹವಳ, ಕೆಂಪು ಹರಳು ಇತ್ಯಾದಿಗಳನ್ನು ಕೊಟ್ಟು ವಸ್ತು
ಗಳನ್ನು ನಿನ್ನಿಂದ ಕೊಂಡುಕೊಂಡರು.

17‘‘ಇಸ್ರೇಲ್ ಮತ್ತು ಯೆಹೂದ ದೇಶದವರು
ನಿನ್ನೊಂದಿಗೆ ವ್ಯಾಪಾರ ಮಾಡಿದರು. ಅವರು ನಿನ್ನ ವಸ್ತು
ಗಳಿಗೆ ಗೋಧಿ, ಆಲೀವ್, ಅಂಜೂರ, ಜೇನು, ಎಣ್ಣೆ
ಮತ್ತು ಮುಲಾಮುಗಳನ್ನು ಕೊಟ್ಟರು. 18ದಮಸ್ಕವೂ ನಿನ್ನ
ಒಳ್ಳೆಯ ಗಿರಾಕಿಯಾಗಿತ್ತು. ನೀನು ಸಂಪಾದಿಸಿಕೊಂಡಿದ್ದ
ಅನೇಕ ಒಳ್ಳೆಯ ವಸ್ತುಗಳಿಗಾಗಿ ಅವರು ನಿನ್ನೊಂದಿಗೆ
ವ್ಯಾಪಾರ ಮಾಡಿದರು. ಅವರು ಹೆಲ್ಬೋನಿನ ದ್ರಾಕ್ಷಾ
ರಸವನ್ನು ಮತ್ತು ಉಣ್ಣೆಯನ್ನು ಆ ವಸ್ತುಗಳಿಗಾಗಿ
ಮಾರಿದರು. 19ಅಲ್ಲದೆ ಊಜಾಲಿನ ದ್ರಾಕ್ಷಾರಸವನ್ನು,
ಉಕ್ಕನ್ನು, ದಾಲ್ಚಿನ್ನಿ ಮತ್ತು ಕಬ್ಬನ್ನು ಆ ವಸ್ತುಗಳಿಗಾಗಿ
ವ್ಯಾಪಾರ ಮಾಡಿದರು. 20ದೆದಾನಿನ ನಿನ್ನ ಜನರು ಒಳ್ಳೇ
ವ್ಯಾಪಾರಸ್ಥರು. ಅವರು ಸವಾರಿ ಕುದುರೆಗಳನ್ನೂ
ಜೇನನ್ನೂ ಬಟ್ಟೆಗಳನ್ನೂ ಕೊಟ್ಟು ಕೊಂಡುಕೊಂಡರು.
21ಅರಾಬ್ಯರು ಮತ್ತು ಕೇದಾರಿನವರು ಕುರಿಮರಿಗಳನ್ನು,
ಟಗರು, ಮತ್ತು ಆಡುಗಳನ್ನು ಕೊಟ್ಟು ವ್ಯಾಪಾರ
ಮಾಡಿದರು. 22ಶೆಬ ಮತ್ತು ರಗ್ಮದ ವ್ಯಾಪಾರಿಗಳು
ನಿನ್ನೊಂದಿಗೆ ವ್ಯಾಪಾರ ಮಾಡಿದರು. ಅವರು ನಿನಗೆ
ಸಂಬಾರ ಜೀನಸು, ರತ್ನಗಳು ಮತ್ತು ಚಿನ್ನವನ್ನು ಬದಲಿ
ಕೊಟ್ಟರು. 23ಮತ್ತು ಹಾರಾನ್, ಕನ್ನೆ, ಎದೆನ್, ಶೆಬದ
ವ್ಯಾಪಾರಿಗಳು, ಅಶ್ಶೂರ್ ಮತ್ತು ಕಿಲ್ಮದ್ ಊರಿನವರು
ನಿನ್ನೊಂದಿಗೆ ವ್ಯಾಪಾರ ಮಾಡಿದರು. 24ಅವರು
ನಿನ್ನೊಂದಿಗೆ ಉತ್ತಮ ಬಟ್ಟೆಗಳು, ಕಸೂತಿ ಕೆಲಸಗಳು,
ಬಣ್ಣ ಬಣ್ಣದ ಜಮಖಾನೆಗಳು, ಹುರಿದ ಹಗ್ಗ ಗಳು,
ದೇವದಾರು ಮರಗಳಿಂದ ಮಾಡಿದ ವಸ್ತುಗಳು
ಇವುಗಳೊಂದಿಗೆ ವ್ಯಾಪಾರ ನಡಿಸಿದರು. 25ತಾರ್ಷೀಷಿನ
ಹಡಗುಗಳು ನೀನು ಮಾರಿದ ವಸ್ತುಗಳನ್ನು
ಕೊಂಡೊಯ್ದುವು.

‘‘ತೂರೇ, ನೀನು ಆ ಸರಕು ಸಾಗಣಿಕೆಯ ಹಡಗುಗ
ಗಳಂತೆ ಇದ್ದೀ. ಸಮುದ್ರದಲ್ಲಿ ಅನೇಕ ಐಶ್ವರ್ಯ
ಗಳಿಂದ ತುಂಬಿದವಳಾಗಿದ್ದೀ.
26 ನಿನ್ನನ್ನು ಹುಟ್ಟುಹಾಕುವವರು ಸಮುದ್ರದ ಬಹು
ದೂರ ನಿನ್ನನ್ನು ನಡಿಸಿದರು. ಆದರೆ ಪೂರ್ವದಿಂದ
ಬಂದ ಬಲವುಳ್ಳ ಗಾಳಿಯು ನಿನ್ನನ್ನು
ಮುರಿಯುವದು.

27 ‘‘ನಿನ್ನ ಎಲ್ಲಾ ಐಶ್ವರ್ಯವು, ನಿನ್ನ ದಿನಸುಗಳು, ನಿನ್ನ
ಸರಕುಗಳು, ನಿನ್ನ ನಾವಿಕರು, ನಿನ್ನ ಅಂಬಿಗರು,
ನಿನ್ನ ಕಂಡಿಗಳನ್ನು ಭದ್ರಪಡಿಸುವವರು, ನಿನ್ನ
ವ್ಯಾಪಾರಿಗಳು, ನಿನ್ನ ಎಲ್ಲಾ ಸೈನಿಕರು, ನಿನ್ನ ಎಲ್ಲಾ
ಸಿಬ್ಬಂದಿ ವರ್ಗದವರು ನಾಶನದ ದಿನದಲ್ಲಿ
ಸಮುದ್ರದೊಳಗೆ ಮುಳುಗಿಹೋಗುವರು.

---

**ಸೈಪ್ರಸ್** ಅಕ್ಷರಶಃ ‘‘ಎಲೀಷ.’’ ಇದು ಎನ್‌ಕೋಮಿ, ಸೈಪ್ರಸ್‌ನ ಸಮೀಪದ ಪ್ರದೇಶವಾಗಿದ್ದಿರಬಹುದು. ಅಥವಾ ಗ್ರೀಕ್ ದ್ವೀಪಗಳಲ್ಲಿ ಒಂದಾಗಿರಬಹುದು.

28 ನಿನ್ನ ವ್ಯಾಪಾರಿಗಳನ್ನು ನೀನು ಬಹುದೂರ ಕಳು
ಹಿಸುವಿ. ಆ ಸ್ಥಳಗಳು ನಿನ್ನ ಹಡಗಿನ ನಾವಿಕನ
ಕೂಗಾಟವನ್ನು ಕೇಳಿ ಭಯದಿಂದ ತತ್ತರಿಸುವವು.
29 ಹಡಗಿನ ಎಲ್ಲಾ ನಾವಿಕರು ನೀರಿಗೆ ಧುಮುಕಿ
ಈಜುತ್ತಾ ದಡ ಸೇರುವರು.
30 ನಿನಗೋಸ್ಕರ ಅವರು ದುಃಖಿಸುತ್ತಾ ಅಳುವರು.
ತಲೆಯ ಮೇಲೆ ಧೂಳನ್ನು ತೂರಿ ಬೂದಿರಾಶಿಯ
ಮೇಲೆ ಹೊರಳಾಡುವರು.
31 ನಿನಗಾಗಿ ಶೋಕದಿಂದ ತಮ್ಮ ತಲೆಗಳನ್ನು ಬೋಳಿ
ಸುವರು. ಶೋಕದ ಬಟ್ಟೆಗಳನ್ನು ಧರಿಸುವರು.
ತಮ್ಮ ಪ್ರಿಯರು ಸತ್ತರೆ ಅಳುವಂತೆ ನಿನಗಾಗಿ
ಅಳುವರು.

32‘‘ಅಳುತ್ತಾ ನಿನಗೆ ಈ ಶೋಕಗೀತೆಯನ್ನು
ಹಾಡುವರು:

‘‘‘ತೂರಿನಂತೆ ಯಾರಿಲ್ಲ, ಆದರೆ ತೂರ್ ಹಾಳಾಗಿ
ಹೋಯಿತು, ಸಮುದ್ರ ಮಧ್ಯದಲ್ಲಿ ನಾಶ
ವಾಯಿತು.
33 ನಿನ್ನ ವ್ಯಾಪಾರಿಗಳು ಸಮುದ್ರದಾಚೆ ಹೋದರು;
ನೀನು ಅನೇಕರನ್ನು ತೃಪ್ತಿಗೊಳಿಸಿದಿ. ನಿನ್ನ
ಐಶ್ವರ್ಯದಿಂದಲೂ ನೀನು ಮಾರಿದ ಸರಕುಗ
ಳಿಂದಲೂ ನೀನು ಲೋಕದ ರಾಜರನ್ನು
ಐಶ್ವರ್ಯವಂತರನ್ನಾಗಿ ಮಾಡಿದಿ.
34 ನೀನು ಈಗ ಸಮುದ್ರದ ನೀರಿನಿಂದ ಮುರಿದು
ಬಿದ್ದಿರುವಿ. ಆಳವಾದ ನೀರಿನಲ್ಲಿ ಮುಳುಗಿಸಲ್ಪ
ಟ್ಟಿದ್ದೀ. ನೀನು ಮಾರುವ ಸರಕುಗಳೂ ನಿನ್ನ
ಜನರೂ ಬಿದ್ದು ಹೋದರು.
35 ಕರಾವಳಿಯಲ್ಲಿ ವಾಸಿಸುವ ಜನರೆಲ್ಲರೂ ನಿನ್ನ
ವಾರ್ತೆಯನ್ನು ಕೇಳಿ ಚಕಿತರಾದರು. ಅವರ
ರಾಜರು ದಂಗುಬಡಿದವರಾಗಿ ಭಯಭೀತ
ರಾಗುವರು.
36 ಬೇರೆ ದೇಶಗಳಲ್ಲಿರುವ ವ್ಯಾಪಾರಿಗಳು ಆಶ್ಚರ್ಯ
ದಿಂದ ಸಿಳ್ಳು ಹಾಕಿದರು. ನಿನಗೆ ಸಂಭವಿಸಿದ
ವಿಷಯಗಳು ಜನರಿಗೆ ಭೀತಿಯನ್ನುಂಟು
ಮಾಡಿತು. ಯಾಕೆಂದರೆ ನಿನ್ನ ಕಥೆ ಮುಗಿಯಿತು.
ನಿನಗೆ ಅಂತ್ಯವಾಯಿತು. ಇನ್ನು ನೀನು
ಕಾಣುವದಿಲ್ಲ.’’’

### ತಾನು ದೇವರಂತೆ ಎಂದು ತೂರ್ ನೆನಸಿತು

28 ಯೆಹೋವನ ನುಡಿಯು ನನಗೆ ಬಂತು. ಆತನು
ಹೇಳಿದ್ದೇನೆಂದರೆ, 2‘‘ನರಪುತ್ರನೇ, ತೂರಿನ
ರಾಜನಿಗೆ ಹೀಗೆ ಹೇಳು: ‘ನನ್ನ ಒಡೆಯನಾದ
ಯೆಹೋವನು ಹೀಗೆ ಹೇಳುತ್ತಾನೆ,

‘‘‘ನೀನು ಬಹಳ ಹೆಮ್ಮೆಯುಳ್ಳವನು. ನಾನು ದೇವರು
ಎಂದು ಹೇಳುತ್ತೀ. ಸಾಗರದ ಮಧ್ಯದಲ್ಲಿ ದೇವರು
ಗಳ ಸಿಂಹಾಸನದಲ್ಲಿ ನಾನು ಕೂತಿರುತ್ತೇನೆ ಎಂದು
ಅನ್ನುತೀ. ಆದರೆ ನೀನು ಮನುಷ್ಯನು, ದೇವರಲ್ಲ.
ನೀನು ದೇವರೆಂದು ನೀನೇ ನೆನಸಿಕೊಳ್ಳುತ್ತೀ.
3 ನೀನು ದಾನಿಯೇಲನಿಗಿಂತ ಜಾಣನು ಎಂಬು
ದಾಗಿ ಭಾವಿಸುತ್ತೀ. ಎಲ್ಲಾ ರಹಸ್ಯಗಳು ನನಗೆ
ಗೊತ್ತು ಎಂದು ನೀನು ನೆನಸುವಿ..
4 ನಿನ್ನ ಜಾಣತನ ಮತ್ತು ಆಲೋಚನೆಗಳಿಂದ ನೀನು
ಐಶ್ವರ್ಯವನ್ನು ಕೂಡಿಹಾಕಿದ್ದೀ. ನಿನ್ನ ಖಜಾನೆ
ಯಲ್ಲಿ ಬೆಳ್ಳಿ ಬಂಗಾರವನ್ನು ಶೇಖರಿಸಿದ್ದೀ.
5 ನಿನ್ನ ವ್ಯಾಪಾರದ ಜ್ಞಾನದಿಂದ ನಿನ್ನ ಐಶ್ವರ್ಯವು
ಬೆಳೆಯುವಂತೆ ಮಾಡಿದ್ದೀ. ಆ ಐಶ್ವರ್ಯದ
ಕಾರಣದಿಂದ ನೀನು ಹೆಮ್ಮೆಯಿಂದ ತುಂಬಿರುತ್ತೀ.
6 ಆದುದರಿಂದ ನನ್ನ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ, ತೂರ್, ನೀನು ದೇವರೆಂದು
ನೆನಸಿಕೊಂಡಿಯಲ್ಲಾ?
7 ನಿನಗೆ ವಿರುದ್ಧವಾಗಿ ಯುದ್ಧ ಮಾಡಲು ಅಪರಿಚಿತ
ರನ್ನು ಕರೆತರುವೆನು. ಅವರು ಎಲ್ಲಾ ಜನಾಂಗಗಳ
ವರಿಗಿಂತ ಕ್ರೂರರು. ಅವರು ತಮ್ಮ ಖಡ್ಗವನ್ನು
ಎಳೆದು ನಿನ್ನ ಜ್ಞಾನದಿಂದ ಕೊಂಡುಕೊಂಡಿದ್ದ
ಎಲ್ಲಾ ಬೆಲೆಬಾಳುವ ಅಪೂರ್ವ ವಸ್ತುಗಳನ್ನು ನಾಶ
ಮಾಡುವರು.
8 ನಿನ್ನ ಘನತೆಯನ್ನು ಕೆಡಿಸಿ ಬಿಡುವರು. ಸಮಾಧಿಗೆ
ನಿನ್ನನ್ನು ತರುವರು. ಸಮುದ್ರದಲ್ಲಿ ಸತ್ತ ನಾವಿಕನ
ಸ್ಥಿತಿಯು ನಿನ್ನದಾಗುವದು.
9 ಆ ಮನುಷ್ಯನು ನಿನ್ನನ್ನು ಕೊಂದು ಹಾಕುವನು.
ಆಗಲೂ ನೀನು ‘‘ನಾನು ದೇವರು’’ ಎಂದು
ಹೇಳುವಿಯಾ? ಇಲ್ಲ. ಅವನು ನಿನ್ನನ್ನು ತನ್ನ
ಅಧಿಕಾರದಲ್ಲಿರಿಸುವನು. ಆಗ ನೀನು ‘ಬರೇ
ಮನುಷ್ಯನೇ’ ಎಂದು ತಿಳಿಯುವಿ.
10 ಪರದೇಶಸ್ಥರು ನಿನ್ನನ್ನು ಪರದೇಶಿಯಂತೆ
ನೋಡುವರು ಮತ್ತು ಕೊಲೆ ಮಾಡುವರು. ನಾನು
ಆ ರೀತಿಯಾಗಿ ಮಾಡಬೇಕೆಂದು ಆಜ್ಞಾಪಿಸುವದ
ರಿಂದ ನಿನಗೆ ಹಾಗೆ ಆಗುವದು.’’’ ನನ್ನ ಒಡೆಯ
ನಾದ ಯೆಹೋವನು ಹೀಗೆ ಹೇಳಿದನು.

11ಯೆಹೋವನ ಮಾತುಗಳು ನನಗೆ ಬಂದವು. ಆತನು
ಹೇಳಿದ್ದೇನೆಂದರೆ, 12‘‘ನರಪುತ್ರನೇ, ತೂರ್ ದೇಶದ
ರಾಜನಿಗೆ ಈ ಶೋಕಗೀತೆಯನ್ನು ಹಾಡು. ಅವನಿಗೆ ಹೀಗೆ
ಹೇಳು: ‘ನನ್ನ ಒಡೆಯನಾದ ಯೆಹೋವನು ಇದನ್ನು
ಹೇಳಿದ್ದಾನೆ,

‘‘‘ನೀನೊಬ್ಬ ಆದರ್ಶ ಮನುಷ್ಯನಾಗಿದ್ದೆ. ಸರ್ವಾಂಗ
ಸುಂದರನೂ ಜ್ಞಾನದಿಂದ ತುಂಬಿದವನೂ ಆಗಿದ್ದೆ.
13 ದೇವರ ಉದ್ಯಾನವನವಾಗಿದ್ದ ಏದೆನಿನಲ್ಲಿ
ನೀನಿದ್ದೀ. ನಿನ್ನ ಬಳಿಯಲ್ಲಿ ಬಂಗಾರದ ಚೌಕಟ್ಟಿ
ನಲ್ಲಿ ಕುಳ್ಳಿರಿಸಿದ ವಜ್ರ, ವೈಢೂರ್ಯ, ನವರತ್ನಗಳ
ಆಭರಣಗಳಿದ್ದವು. ನೀನು ಸೃಷ್ಟಿಸಲ್ಪಟ್ಟ ದಿನದಲ್ಲಿ
ಈ ಸೌಂದರ್ಯವು ನಿನಗೆ ಕೊಡಲ್ಪಟ್ಟಿತು.
ದೇವರು ನಿನ್ನನ್ನು ಬಲಾಢ್ಯನಾಗಿ ಮಾಡಿದನು.
14 ನೀನು ಆರಿಸಲ್ಪಟ್ಟ ಕೆರೂಬಿಯರಲ್ಲಿ ಒಬ್ಬ
ನಾಗಿದ್ದೀ. ನಿನ್ನ ರೆಕ್ಕೆಗಳು ನನ್ನ ಸಿಂಹಾಸನದ ಮೇಲೆ
ಚಾಚಿದ್ದವು ನಾನು ನಿನ್ನನ್ನು ದೇವರ ಪವಿತ್ರ ಪರ್ವತ
ದಲ್ಲಿಟ್ಟೆನು. ನೀನು ಬೆಂಕಿಯಂತೆ ಹೊಳೆಯುವ
ರತ್ನಗಳ ಮೇಲೆ ನಡೆದಾಡಿದಿ.
15 ನಾನು ನಿನ್ನನ್ನು ಸೃಷ್ಟಿಸಿದಾಗ ನೀನು ಸದ್ಗುಣಿಯಾಗಿ
ನಿರ್ದೋಷಿಯಾಗಿದ್ದೀ. ಆದರೆ ನೀನು ದುಷ್ಟ
ನಾಗುತ್ತಾ ಬಂದಿ.
16 ನಿನ್ನ ವ್ಯಾಪಾರವು ನಿನಗೆ ಐಶ್ವರ್ಯವನ್ನು ತಂದಿತು.
ಆದರೆ ಅದರೊಂದಿಗೆ ನಾನಾ ದುಷ್ಟತ್ವಗಳು
ನಿನ್ನೊಂದಿಗೆ ಬಂದು ನೀನು ಪಾಪ ಮಾಡಿದೆ. ಆಗ
ನಾನು ನಿನ್ನನ್ನು ಅಶುದ್ಧನಂತೆ ನೋಡಿದೆ. ನಿನ್ನನ್ನು
ದೇವರ ಪರ್ವತದಿಂದ ದೊಬ್ಬಿಬಿಟ್ಟೆನು. ನೀನು
ನನ್ನ ಕೆರೂಬಿಯರಲ್ಲಿ ವಿಶೇಷವಾದವನಾಗಿದ್ದೀ.
ನಿನ್ನ ರೆಕ್ಕೆಗಳು ನನ್ನ ಸಿಂಹಾಸನದ ಮೇಲೆ ಚಾಚಿರು
ತ್ತಿದ್ದವು. ಆದರೆ ಬೆಂಕಿಯಂತೆ ಹೊಳೆಯುವ
ರತ್ನಾಭರಣಗಳನ್ನೆಲ್ಲಾ ತೆಗೆದಿಡಲು ನಿನ್ನನ್ನು
ಬಲವಂತಪಡಿಸಿದೆ.
17 ನಿನ್ನ ಸೌಂದರ್ಯವು ನಿನಗೆ ಹೆಮ್ಮೆ ಏರುವಂತೆ
ಮಾಡಿತು. ನಿನ್ನ ಘನತೆಯು ನಿನ್ನ ಜ್ಞಾನವನ್ನು
ಕೆಡಿಸಿತು. ಆದುದರಿಂದ ನಿನ್ನನ್ನು ನೆಲಕ್ಕೆ ದಬ್ಬಿದೆ.
ಈಗ ಬೇರೆ ರಾಜರುಗಳು ನಿನ್ನನ್ನೇ ಎವೆಯಿಕ್ಕದೆ
ನೋಡುತ್ತಾರೆ.
18 ನೀನು ಅನೇಕ ತಪ್ಪುಗಳನ್ನು ಮಾಡಿದಿ. ನೀನು
ಮೋಸಗಾರನಾದ ವ್ಯಾಪಾರಿ. ಇದರಿಂದಾಗಿ
ನೀನು ಪವಿತ್ರ ಸ್ಥಳವನ್ನು ಹೊಲೆಮಾಡಿರುವಿ.
ಆದುದರಿಂದ ನಿನ್ನೊಳಗೆ ಬೆಂಕಿಯನ್ನುಂಟು
ಮಾಡಿ ಅದು ನಿನ್ನನ್ನು ದಹಿಸುವಂತೆ ಮಾಡಿದೆನು.
ನೀನು ಸುಟ್ಟ ಬೂದಿಯಾದಿ. ಈಗ ಎಲ್ಲರೂ ನಿನ್ನ
ಲಜ್ಜಾತನವನ್ನು ನೋಡುವರು.
19 ಬೇರೆ ಜನಾಂಗಗಳ ಜನರು ನಿನಗೆ ಆದದ್ದನ್ನು
ನೋಡಿ ಬೆಚ್ಚಿ ಬೆರಗಾದರು. ಜನರಿಗೆ ನಿನಗಾದು
ದನ್ನು ನೋಡಿ ಭಯಹಿಡಿಯಿತು. ನಿನ್ನ ಅಂತ್ಯ
ವಾಯಿತು!’’’

## ಚೀದೋನಿನ ವಿರುದ್ಧವಾದ ಸಂದೇಶ

20 ಯೆಹೋವನ ಸಂದೇಶ ನನಗೆ ಬಂದಿತು. ಆತನು
ಹೀಗೆ ಹೇಳಿದನು, 21 ‘‘ನರಪುತ್ರನೇ, ಚೀದೋನಿನ ಕಡೆಗೆ
ನೋಡಿ ನನ್ನ ಪರವಾಗಿ ನೀನೇ ಅದರ ವಿರುದ್ಧವಾಗಿ ಮಾತ
ನಾಡು. 22 ನನ್ನ ಒಡೆಯನಾದ ಯೆಹೋವನು ಈ
ಮಾತುಗಳನ್ನು ಹೇಳಿದನೆಂದು ಅವನಿಗೆ ತಿಳಿಸು:

‘‘‘ಚೀದೋನೇ, ನಾನು ನಿನಗೆ ವಿರುದ್ಧವಾಗಿದ್ದೇನೆ.
ನಿನ್ನ ಜನರು ನನ್ನನ್ನು ಗೌರವಿಸಲು ಕಲಿಯುವರು.
ನಾನು ಚೀದೋನನನ್ನು ಶಿಕ್ಷಿಸಿದಾಗ ನಾನೇ
ಯೆಹೋವನೆಂದು ಜನರಿಗೆ ಗೊತ್ತಾಗುವದು.
ನಾನು ಪವಿತ್ರನು ಎಂದು ಅವರು ತಿಳಿದು ಆ ರೀತಿ
ಯಾಗಿ ಅವರು ನನ್ನೊಂದಿಗೆ ವರ್ತಿಸುವರು.
23 ಚೀದೋನಿಗೆ ನಾನು ರೋಗ ಮರಣಗಳನ್ನು
ಕಳುಹಿಸುವೆನು. ನಗರದೊಳಗೆ ವಾಸಿಸುವ ಅನೇಕ
ಮಂದಿ ಸಾಯುವರು. ನಗರದ ಹೊರಗೆ ಖಡ್ಗವು
ಅನೇಕರನ್ನು ಕೊಲ್ಲುವದು. ಆಗ ಅವರು ನಾನು
ಯೆಹೋವನೆಂದು ತಿಳಿಯುವರು.’’’

## ರಾಜ್ಯಗಳು ಇಸ್ರೇಲಿಗೆ ಹಾಸ್ಯ ಮಾಡುವದನ್ನು ನಿಲ್ಲಿಸುವರು

24 ‘‘‘ಇಸ್ರೇಲಿನ ಸುತ್ತಲಿರುವ ರಾಜ್ಯಗಳು ಆದನ್ನು ಹಗೆ
ಮಾಡಿದರು. ಆ ರಾಜ್ಯಗಳಿಗೆ ಬಹು ದೊಡ್ಡ ಕಂಟಕವು
ಬಂದೊದಗುವದು. ಆಗ ಹರಿತವಾದ ಮುಳ್ಳಾಗಲೀ,
ಮುಳ್ಳಿನ ಪೊದೆಗಳಾಗಲೀ ಇಸ್ರೇಲಿನ ಜನರನ್ನು ಘಾಸಿ
ಮಾಡಲು ಇರುವದಿಲ್ಲ. ಆಗ ನಾನು ಅವರ ಒಡೆಯನಾದ
ಯೆಹೋವನು ಎಂದು ಅವರು ತಿಳಿಯುವರು.’’’
25 ನನ್ನ ಒಡೆಯನಾದ ಯೆಹೋವನು ಹೀಗೆ ಹೇಳಿ
ದನು, ‘‘ಬೇರೆ ದೇಶಗಳಿಗೆ ನಾನು ಇಸ್ರೇಲರನ್ನು ಚದರಿಸಿ
ದೆನು. ಆದರೆ ತಿರುಗಿ ಇಸ್ರೇಲರನ್ನೆಲ್ಲಾ ಒಟ್ಟುಗೂಡಿಸು
ವೆನು. ಆಗ ಆ ದೇಶದವರು ನಾನು ಪವಿತ್ರನಾದ ದೇವ
ರೆಂದು ತಿಳಿದು ಆ ರೀತಿಯಾಗಿ ನನ್ನನ್ನು ನೋಡುವರು.
ಆಗ ಇಸ್ರೇಲರು ತಮ್ಮ ದೇಶದಲ್ಲಿ ವಾಸಮಾಡುವರು. ಆ
ದೇಶವನ್ನು ನನ್ನ ಸೇವಕನಾದ ಯಾಕೋಬನಿಗೆ ನಾನು
ಕೊಟ್ಟಿದ್ದೆನು.
26 ‘‘ಆ ದೇಶದಲ್ಲಿ ಅವರು ಸುರಕ್ಷಿತವಾಗಿ ವಾಸಿಸುವರು;
ಮನೆಗಳನ್ನು ಕಟ್ಟಿ ದ್ರಾಕ್ಷಿತೋಟಗಳನ್ನು ಮಾಡುವರು.
ಅವರನ್ನು ದ್ವೇಷಿಸಿದ ರಾಜ್ಯಗಳನ್ನು ದಂಡಿಸುವೆನು. ಆಗ
ಇಸ್ರೇಲ್ ಜನರು ಸುರಕ್ಷಿತವಾಗಿ ಜೀವಿಸುವರು;
ನಾನೇ ದೇವರಾದ ಯೆಹೋವನು ಎಂದು ತಿಳಿದು
ಕೊಳ್ಳುವರು.’’

### ಈಜಿಪ್ಟಿನ ವಿರುದ್ಧವಾದ ಸಂದೇಶ

29 ಸೆರೆ ಒಯ್ಯಲ್ಪಟ್ಟ ಹತ್ತನೇ ವರುಷದ ಹತ್ತನೇ
ತಿಂಗಳಿನ, ಹನ್ನೆರಡನೇ ದಿವಸದಲ್ಲಿ ನನ್ನ
ಒಡೆಯನಾದ ಯೆಹೋವನ ಸಂದೇಶ ನನಗೆ ಬಂದಿತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ, ಈಜಿಪ್ಟಿನ
ರಾಜನಾದ ಫರೋಹನ ಕಡೆಗೆ ಮುಖಮಾಡು.
ಅವನಿಗೂ ಈಜಿಪ್ಟಿಗೂ ವಿರುದ್ಧವಾಗಿ ನನ್ನ ಪರವಾಗಿ
ಮಾತನಾಡು. 3‘ನನ್ನ ಒಡೆಯನಾದ ಯೆಹೋವನು ಹೀಗೆ
ಹೇಳಿದ್ದಾನೆ ಎಂದು ಅವರಿಗೆ ತಿಳಿಸು,

‘‘‘ಈಜಿಪ್ಟಿನ ರಾಜನಾದ ಫರೋಹನೇ, ನಾನು ನಿನಗೆ
ವಿರುದ್ಧವಾಗಿದ್ದೇನೆ. ನೀನು ನೈಲ್ ನದಿಯ ದಡ
ದಲ್ಲಿ ಮಲಗಿರುವ ಪೇರ್ಮೊಸಳೆ, ‘‘ಇದು ನಾನು
ನಿರ್ಮಿಸಿದ ಹೊಳೆ’’ ಎಂದು ನೀನು ಹೇಳಿ
ಕೊಳ್ಳುತ್ತೀ.

4-5‘‘‘ಆದರೆ ನಾನು ನಿನ್ನ ದವಡೆಗಳಿಗೆ ಕೊಂಡಿಗಳನ್ನು
ಸಿಕ್ಕಿಸುವೆನು. ನೈಲ್ ನದಿಯ ಮೀನುಗಳು ನಿನ್ನ
ಪೊರೆಗಳಿಗೆ ಸಿಲುಕಿಕೊಳ್ಳುವವು. ನಾನು ನಿನ್ನನ್ನೂ
ನಿನ್ನ ಮೀನುಗಳನ್ನೂ ನೀರಿನೊಳಗಿಂದ ಹೊರಕ್ಕೆತ್ತಿ
ಒಣನೆಲದ ಮೇಲೆ ಹಾಕುವೆನು. ಯಾರೂ ನಿನ್ನನ್ನು
ತೆಗೆದು ನೆಲದೊಳಗೆ ಹೂಣಿಡುವದಿಲ್ಲ. ನಾನು
ನಿನ್ನನ್ನು ಕಾಡು ಪ್ರಾಣಿಗಳಿಗೂ ಪಕ್ಷಿಗಳಿಗೂ
ಕೊಡುವೆನು. ಅವರಿಗೆ ನೀನು ಆಹಾರವಾಗುವಿ.

6 ಆಗ ಈಜಿಪ್ಟಿನಲ್ಲಿ ವಾಸಮಾಡುವವರೆಲ್ಲರೂ
ನಾನು ಒಡೆಯನಾದ ಯೆಹೋವನು ಎಂದು
ತಿಳಿದುಕೊಳ್ಳುವರು. ನಾನು ಯಾಕೆ ಹೀಗೆ
ಮಾಡುತ್ತಿದ್ದೇನೆ? ಯಾಕೆಂದರೆ ಇಸ್ರೇಲಿನ ಜನರು
ಈಜಿಪ್ಟಿನ ಸಹಾಯದ ಮೇಲೆ ಆತುಕೊಂಡರು.
ಆದರೆ ಈಜಿಪ್ಟ್ ಪೊಳ್ಳುಬೆತ್ತದಂತಿತ್ತು.

7 ಇಸ್ರೇಲ್ ಜನರು ಈಜಿಪ್ಟಿನ ಮೇಲೆ ಆತು
ಕೊಂಡರು. ಆದರೆ ಈಜಿಪ್ಟ್ ಅವರ ಕೈಗಳನ್ನೂ
ಭುಜಗಳನ್ನೂ ಗಾಯಗೊಳಿಸಿತು. ನಿನ್ನ ಸಹಾಯ
ಕ್ಕಾಗಿ ಅವರು ನಿನ್ನನ್ನು ಆಶ್ರಯಿಸಿದರು. ಆದರೆ
ನೀನು ಅವರ ಬೆನ್ನೆಲುಬನ್ನು ತಿರುಗಿಸಿ ಮುರಿದು
ಬಿಟ್ಟೀ.’’’

8 ಆದುದರಿಂದ ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ, ‘‘ನಾನು ನಿನಗೆ ವಿರುದ್ಧವಾಗಿ ಖಡ್ಗ
ವನ್ನು ತರುವೆನು. ನಿನ್ನ ಜನರನ್ನೂ ಪ್ರಾಣಿಗಳನ್ನೂ
ಸಂಪೂರ್ಣವಾಗಿ ಸಂಹರಿಸುವೆನು.

9 ಈಜಿಪ್ಟ್ ನಿಶ್ಶೇಷವಾಗಿ ನಾಶವಾಗುವದು. ಆಗ
ಅವರು ನಾನೇ ದೇವರಾದ ಯೆಹೋವನು ಎಂದು
ತಿಳಿದುಕೊಳ್ಳುವರು.’’

ದೇವರು ಇಂತೆಂದನು, ‘‘ನಾನು ಯಾಕೆ ಹೀಗೆ ಮಾಡು
ತ್ತಿದ್ದೇನೆ. ಯಾಕೆಂದರೆ ನೀನು, ‘ಇದು ನನ್ನ ನದಿ, ಇದನ್ನು
ನಾನು ಮಾಡಿದೆನು’ ಎಂದು ಹೇಳಿದಿ. 10ಆದುದರಿಂದ
ನಾನು ನಿನಗೆ ವಿರೋಧವಾಗಿರುತ್ತೇನೆ. ನೈಲ್ ನದಿಯ
ಅನೇಕ ಶಾಖೆಗಳಿಗೂ ನಾನು ವಿರೋಧವಾಗಿದ್ದೇನೆ.
ಈಜಿಪ್ಟನ್ನು ನಾನು ಸಂಪೂರ್ಣವಾಗಿ ನಾಶಮಾಡುತ್ತೇನೆ.
ಮಿಗ್ದೋಲ್‌ನಿಂದ ಅಸ್ವಾನ್ ತನಕ ಇರುವ ಪಟ್ಟಣಗಳು
ಬರಿದಾಗುವವು. ಇಥಿಯೋಪ್ಯದ ಮೇರೆಯ ತನಕವೂ
ಬರಿದಾಗುವದು. 11ಯಾವನೂ, ಯಾವ ಪ್ರಾಣಿಯೂ
ಈಜಿಪ್ಟ್ ದೇಶವನ್ನು ದಾಟುವದಿಲ್ಲ. ನಲವತ್ತು ವರ್ಷದ
ತನಕ ಯಾರೂ ಅಲ್ಲಿ ನೆಲೆಸುವದಿಲ್ಲ. 12ನಾನು ಈಜಿಪ್ಟನ್ನು
ನಾಶಮಾಡುತ್ತೇನೆ. ಅದರ ನಗರಗಳು ನಲವತ್ತು ವರ್ಷ
ಗಳ ತನಕ ನಿರ್ಜನವಾಗಿರುವದು. ಈಜಿಪ್ಟ್ ಜನರನ್ನು
ಬೇರೆ ದೇಶಗಳಿಗೆ ಅಟ್ಟಿಬಿಡುವೆನು. ಪರದೇಶಗಳಲ್ಲಿ
ಅವರು ಪ್ರವಾಸಿಗಳಂತಿರುವರು.’’

13ನನ್ನ ಒಡೆಯನಾದ ಯೆಹೋವನು ಇದನ್ನು ಹೇಳು
ತ್ತಾನೆ, ‘‘ಈಜಿಪ್ಟಿನ ಜನರನ್ನು ನಾನು ಅನೇಕ ದೇಶಗಳಲ್ಲಿ
ಚದರಿಸಿಬಿಡುವೆನು. ನಾಲ್ವತ್ತು ವರ್ಷದ ಕೊನೆಯಲ್ಲಿ
ಅವರನ್ನು ತಿರಿಗಿ ಒಟ್ಟುಗೂಡಿಸುವೆನು. 14ಸೆರೆಹಿಡಿಯ
ಲ್ಪಟ್ಟ ಈಜಿಪ್ಟರನ್ನು ಪತ್ರೋಸ್ ದೇಶಕ್ಕೆ ಬರಮಾಡು
ವೆನು. ಅವರ ಜನ್ಮ ಸ್ಥಳಕ್ಕೆ ಅವರನ್ನು ತಿರುಗಿ ಬರಮಾಡು
ವೆನು. ಆದರೆ ಅವರ ರಾಜ್ಯಕ್ಕೆ ಮಹತ್ವವಿರುವದಿಲ್ಲ.
15ಅದು ಯಾವ ಮಹತ್ವವೂ ಇಲ್ಲದ ರಾಜ್ಯವಾಗಿರುವದು.
ಬೇರೆ ರಾಜ್ಯಗಳಿಗಿಂತ ಅದು ಎಂದಿಗೂ ಉನ್ನತ ಸ್ಥಾನದ
ಲ್ಲಿರದು. ಅದು ಅಷ್ಟು ಚಿಕ್ಕ ರಾಜ್ಯವಾಗುವುದರಿಂದ ಬೇರೆ
ದೇಶಗಳ ಮೇಲೆ ಅಧಿಕಾರ ನಡೆಸದು. 16ಇಸ್ರೇಲರು
ಅವರ ಮೇಲೆ ಇನ್ನು ಎಂದಿಗೂ ಭರವಸವಿಡುವದಿಲ್ಲ.
ಇಸ್ರೇಲರು ಸಹಾಯಕ್ಕಾಗಿ ದೇವರ ಬಳಿಗೆ ಹೋಗದೆ
ಈಜಿಪ್ಟಿನವರ ಮೇಲೆ ಭರವಸವಿಟ್ಟಿದ್ದ ಪಾಪವನ್ನು ಅರಿತು
ಕೊಳ್ಳುವರು. ಆಗ ಅವರು ನಾನೇ ಒಡೆಯನಾದ
ಯೆಹೋವನೆಂದು ತಿಳಿದುಕೊಳ್ಳುವರು.’’

### ಬಾಬಿಲೋನ್ ಈಜಿಪ್ಟನ್ನು ಸೆರೆಹಿಡಿಯುವದು

17ಯೆಹೋಯಾಖೀನನು ಸೆರೆಹಿಡಿಯಲ್ಪಟ್ಟ ಇಪ್ಪತ್ತೇ
ಳನೇ ವರ್ಷದ, ಮೊದಲನೇ ತಿಂಗಳಿನ ಮೊದಲನೇ ದಿವಸ
ದಲ್ಲಿ ಯೆಹೋವನ ಮಾತುಗಳು ನನಗೆ ಬಂದವು. ಆತನು
ಹೇಳಿದ್ದೇನೆಂದರೆ, 18‘‘ನರಪುತ್ರನೇ, ಬಾಬಿಲೋನಿನ
ರಾಜನಾದ ನೆಬೂಕದ್ನೆಚ್ಚರನು ತನ್ನ ಸೈನ್ಯವು ತೂರ್
ದೇಶದವರೊಂದಿಗೆ ಉಗ್ರವಾಗಿ ಹೋರಾಡುವಂತೆ
ನಡಿಸಿದನು. ಪ್ರತಿ ಸೈನಿಕನ ತಲೆಯನ್ನು ಬೋಳಿಸಿದರು.
ಪ್ರತಿಯೊಬ್ಬನ ಭುಜವು ಭಾರ ಹೊತ್ತು ಹೊತ್ತು
ಸವೆದುಹೋಗಿದ್ದವು. ನೆಬೂಕದ್ನೆಚ್ಚರ್ ಮತ್ತು ಅವನ

ಸೈನ್ಯವು ತೂರ್ ದೇಶವನ್ನು ಸೋಲಿಸಲು ಬಹಳವಾಗಿ
ಪ್ರಯಾಸಪಡಬೇಕಾಗಿಬಂತು. ಆದರೆ ಅವರ ಪ್ರಯಾಸದ
ಪ್ರತಿಫಲವಾಗಿ ಏನೂ ದೊರಕಲಿಲ್ಲ.'' [19]ನನ್ನ ಒಡೆಯ
ನಾದ ಯೆಹೋವನು ಹೇಳುವದೇನೆಂದರೆ, ''ರಾಜನಾದ
ನೆಬೂಕದ್ನೆಚ್ಚರನಿಗೆ ನಾನು ಈಜಿಪ್ಟ್ ದೇಶವನ್ನು ಕೊಡು
ವೆನು. ನೆಬೂಕದ್ನೆಚ್ಚರನು ಈಜಿಪ್ಟಿನವರನ್ನು ಸೆರೆಹಿಡಿದು
ಕೊಂಡೊಯ್ವನು. ಈಜಿಪ್ಟಿನ ಬೆಲೆಬಾಳುವ ವಸ್ತುಗಳ
ನ್ನೆಲ್ಲಾ ದೋಚುವನು. ಇದು ಅವನ ಸೈನಿಕರ ಸಂಬಳ
ವಾಗುವುದು. [20]ನೆಬೂಕದ್ನೆಚ್ಚರನು ಪ್ರಯಾಸದ ಕೆಲಸ
ಮಾಡಿದ್ದರಿಂದ ನಾನು ಅವನಿಗೆ ಪ್ರತಿಫಲವಾಗಿ ಈಜಿಪ್ಟ್
ದೇಶವನ್ನು ಕೊಟ್ಟೆನು. ಯಾಕೆಂದರೆ ಅವರು ನನ
ಗೋಸ್ಕರ ಪ್ರಯಾಸಪಟ್ಟರು.'' ಇದು ಒಡೆಯನಾದ
ಯೆಹೋವನ ನುಡಿ.

[21]''ಆ ದಿವಸದಲ್ಲಿ ಇಸ್ರೇಲ್ ವಂಶವನ್ನು ನಾನು ಬಲ
ಪಡಿಸುವೆನು. ಯೆಹೆಜ್ಕೇಲನೇ, ನೀನು ಅವರೊಂದಿಗೆ
ಮಾತುಡವಂತೆ ಮಾಡುವೆನು. ಆಗ ಅವರು ನಾನೇ
ಯೆಹೋವನೆಂದು ತಿಳಿದುಕೊಳ್ಳುವರು.''

## ಬಾಬಿಲೋನಿನ ಸೈನ್ಯವು ಈಜಿಪ್ಟಿನ ಮೇಲೆ ಯುದ್ಧಮಾಡುವದು

30 ತಿರುಗಿ ಯೆಹೋವನ ಸಂದೇಶ ನನಗೆ ಬಂತು.
ಆತನು ಹೇಳಿದ್ದೇನೆಂದರೆ, [2]''ನರಪುತ್ರನೇ,
ನನ್ನ ಪರವಾಗಿ ಮಾತನಾಡು, 'ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ'ಎಂದು ಹೇಳು.

'''ಅಳುತ್ತಾ ಹೇಳು. ''ಭಯಂಕರ ದಿವಸಗಳು
ಬರುತ್ತವೆ. ಎಂದು ಹೇಳು.'
3 ಆ ದಿನವು ಹತ್ತಿರ ಬಂತು! ಹೌದು, ದೇವರು
ನ್ಯಾಯ ತೀರಿಸುವ ದಿನ ಹತ್ತಿರ ಬಂತು. ಅದು
ಮೋಡ ಕವಿದ ದಿನವಾಗಿರುವುದು. ಅದು
ಜನಾಂಗಗಳಿಗೆ ನ್ಯಾಯತೀರಿಸುವ ಸಮಯ.
4 ಈಜಿಪ್ಟಿಗೆ ವಿರುದ್ಧವಾಗಿ ಒಂದು ಖಡ್ಗವು ಬರು
ವದು! ಈಜಿಪ್ಟ್ ಬೀಳುವಾಗ ಇಥಿಯೋಪ್ಯವು
ಭಯದಿಂದ ನಡುಗುವದು. ಬಾಬಿಲೋನಿನ
ಸೈನ್ಯವು ಈಜಿಪ್ಟಿನವರನ್ನು ಸೆರೆಹಿಡಿದುಕೊಂಡು
ಹೋಗುವದು. ಈಜಿಪ್ಟಿನ ಅಡಿಪಾಯಗಳು
ಒಡೆದುಹೋಗುವವು.

[5]'''ಅನೇಕ ದೇಶಗಳವರು ಈಜಿಪ್ಟಿನವರೊಂದಿಗೆ
ಒಪ್ಪಂದ ಮಾಡಿಕೊಂಡಿದ್ದರು. ಆದರೆ ಇಥಿಯೋಪ್ಯ,
ಪೂಟ್,ಲೂದ್, ಅರೇಬಿಯ, ಲಿಬ್ಯ ಮತ್ತು ಇಸ್ರೇಲಿನ
ಜನರು* ಇವರೆಲ್ಲರೂ ನಾಶವಾಗುವರು.

6 ನನ್ನ ಒಡೆಯನಾದ ಯೆಹೋವನು ಇದನ್ನು ಹೇಳಿ
ದನು: ''ಈಜಿಪ್ಟಿಗೆ ಸಹಾಯ ಮಾಡುವವನು
ಬೀಳುವನು. ಅವಳು ಹೆಮ್ಮೆಪಡುವ ಸಾಮರ್ಥ್ಯ
ಅಂತ್ಯವಾಗುವದು. ಈಜಿಪ್ಟಿನಲ್ಲಿರುವ ಜನರು ರಣ
ರಂಗದಲ್ಲಿ ಸಾಯುವರು. ಮಿಗ್ದೋಲ್‌ನಿಂದ
ಹಿಡಿದು ಅಸ್ವಾನ್ ತನಕ ಜನರು ಸಾಯುವರು.''
ಇದು ನನ್ನ ಒಡೆಯನಾದ ಯೆಹೋವನ ನುಡಿ.
7 ನಾಶ ಮಾಡಲ್ಪಟ್ಟ ಬೇರೆ ದೇಶಗಳನ್ನು ಈಜಿಪ್ಟ್
ಸೇರಿಕೊಳ್ಳುವದು. ಈಜಿಪ್ಟ್ ಬಂಜರು ದೇಶಗಳ
ಲ್ಲೊಂದಾಗುವದು.
8 ಈಜಿಪ್ಟಿನಲ್ಲಿ ನಾನು ಹೊತ್ತಿಸಿದ ಬೆಂಕಿಯು ಅದರ
ಸಹಾಯಕರನ್ನು ದಹಿಸುವದು. ಆಗ ನಾನು
ಯೆಹೋವನೆಂದು ಅವರು ತಿಳಿಯುವರು.

[9]'''ಆ ಸಮಯದಲ್ಲಿ, ನಾನು ಸಂದೇಶವಾಹಕರನ್ನು
ಕಳುಹಿಸುವೆನು. ಅವರು ಇಥಿಯೋಪ್ಯಕ್ಕೆ ಹಡಗಿನಲ್ಲಿ
ಪ್ರಯಾಣ ಮಾಡಿ ಕೆಟ್ಟ ಸುದ್ದಿಯನ್ನು ಒಯ್ಯುವರು.
ಇಥಿಯೋಪ್ಯ ಈಗ ಸುರಕ್ಷಿತವಾಗಿರುವದು. ಆದರೆ
ಈಜಿಪ್ಟ್ ಶಿಕ್ಷಿಸಲ್ಪಟ್ಟಾಗ ಇಥಿಯೋಪ್ಯದ ಜನರು ಭಯ
ದಿಂದ ನಡುಗುವರು. ಆ ಸಮಯವು ಬರುವದು.

10 ನನ್ನ ಒಡೆಯನಾದ ಯೆಹೋವನು ಹೀಗೆನ್ನು
ತ್ತಾನೆ: ''ಈಜಿಪ್ಟಿನ ಜನರನ್ನು ನಾಶಮಾಡಲಿಕ್ಕಾಗಿ
ನಾನು ಬಾಬಿಲೋನಿನ ರಾಜನಾದ ನೆಬೂಕದ್ನೆಚ್ಚ
ರನನ್ನು ಉಪಯೋಗಿಸುವೆನು.
11 ಎಲ್ಲಾ ಜನಾಂಗಗಳಿಗಿಂತ ನೆಬೂಕದ್ನೆಚ್ಚರನು
ಮತ್ತು ಅವನ ಸಿಪಾಯಿಗಳು ಅತ್ಯಂತ ಕ್ರೂರಿಗಳು.
ಈಜಿಪ್ಟನ್ನು ನಾಶಮಾಡಲಿಕ್ಕೆ ಅವರನ್ನು ತರಿಸು
ವೆನು. ಅವರು ತಮ್ಮ ಖಡ್ಗಗಳನ್ನು ಒರೆಯಿಂದ
ತೆಗೆದು ಈಜಿಪ್ಟಿಗೆ ವಿರುದ್ಧವಾಗಿ ಉಪಯೋಗಿಸು
ವರು ಮತ್ತು ದೇಶವನ್ನು ಸತ್ತ ಹೆಣಗಳಿಂದ
ತುಂಬಿಸುವರು.
12 ನೈಲ್ ನದಿಯನ್ನು ನಾನು ಒಣನೆಲವನ್ನಾಗಿ
ಮಾಡುವೆನು. ಆ ಒಣನೆಲವನ್ನು ನಾನು ಕೆಟ್ಟ ಜನ
ರಿಗೆ ಮಾರುವೆನು. ಆ ದೇಶವನ್ನು ಬಂಜರು
ಭೂಮಿಯನ್ನಾಗಿ ಮಾಡಲು ನಾನು ಪರದೇಶಸ್ಥ
ರನ್ನು ಉಪಯೋಗಿಸುವೆನು. ನನ್ನ ಒಡೆಯನಾದ
ಯೆಹೋವನು ಮಾತನಾಡಿದ್ದಾನೆ.''

## ಈಜಿಪ್ಟಿನ ವಿಗ್ರಹಗಳು ನಾಶವಾಗುವವು

13 ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ಈಜಿಪ್ಟಿನಲ್ಲಿರುವ ವಿಗ್ರಹಗಳನ್ನು ನಾನು ನಾಶ
ಮಾಡುವೆನು. ಮೆಂಫೀಸಿನ ವಿಗ್ರಹಗಳನ್ನು ತೆಗೆದು

---

**ಇಸ್ರೇಲಿನ ಜನರು** ಅಕ್ಷರಶಃ ''ಒಪ್ಪಂದ ದೇಶದ ಜನರು.''

ಬಿಡುವೆನು. ಈಜಿಪ್ಟಿನಲ್ಲಿ ಇನ್ನು ಮುಂದೆ ರಾಜ
ನಿರನು. ಅವರಲ್ಲಿ ಭಯವನ್ನು ಹುಟ್ಟಿಸುವೆನು.
14 ಪತ್ರೋಸನ್ನು ನಾನು ಬರಿದಾಗಿ ಮಾಡುವೆನು.
ಚೋವನಿನಲ್ಲಿ ಬೆಂಕಿಯನ್ನುಂಟುಮಾಡುವೆನು.
ನೋಪುರವನ್ನು ನಾನು ಶಿಕ್ಷಿಸುವೆನು.
15 ಈಜಿಪ್ಟಿನ ಕೋಟೆಯಾಗಿರುವ ಸೀನ್ ಪ್ರಾಂತ್ಯದ
ಮೇಲೆ ನನ್ನ ಕೋಪವನ್ನು ಸುರಿಸುವೆನು. ನೋಪು
ರದ ಜನರನ್ನು ನಾನು ನಾಶಮಾಡುವೆನು.
16 ಈಜಿಪ್ಟಿನಲ್ಲಿ ಬೆಂಕಿಯನ್ನುಂಟುಮಾಡುವೆನು.
ಸೀನ್ ನಗರವು ಭಯದಿಂದ ಕಂಗೆಡುವದು.
ಸೈನಿಕರು ನೋಪುರವನ್ನು ಧಾಳಿ ಮಾಡುವರು.
ನೋಪುರದಲ್ಲಿ ಪ್ರತಿದಿವಸವೂ ಸಂಕಟ
ವಿರುವದು.
17 ಓನ್ ಮತ್ತು ಪೀಬೆಸೆತ್‌ನ ಯೋಧರು ಯುದ್ಧ
ದಲ್ಲಿ ಹತರಾಗುವರು, ಹೆಂಗಸರು ಹಿಡಿಯಲ್ಪಟ್ಟು
ಒಯ್ಯಲ್ಪಡುವರು.
18 ನಾನು ಈಜಿಪ್ಟಿನ ನೊಗವನ್ನು ಮುರಿದಾಗ ತಹಪ
ನೇಸ್‌ನಲ್ಲಿ ಕತ್ತಲೆಯ ದಿನವಾಗಿರುವುದು. ಈಜಿ
ಪ್ಟಿನ ಅಧಿಕಾರಕ್ಕೆ ಅಂತ್ಯಬರುವದು. ಈಜಿಪ್ಟಿನ
ಮೇಲೆ ಮೋಡವು ಕವಿಯುವುದು. ಅದರ ಹೆಣ್ಣು
ಮಕ್ಕಳು ಸೆರೆಹಿಡಿಯಲ್ಪಟ್ಟು ಒಯ್ಯಲ್ಪಡುವರು.
19 ನಾನು ಈಜಿಪ್ಟನ್ನು ಶಿಕ್ಷಿಸುವಾಗ ನಾನೇ ಒಡೆಯ
ನಾದ ಯೆಹೋವನು ಎಂದು ಅವರು
ತಿಳಿಯುವರು.

### ಈಜಿಪ್ಟ್ ನಿತ್ಯಕಾಲಕ್ಕೂ ಬಲಹೀನವಾಗುವದು

20ಸೆರೆಹಿಡಿಯಲ್ಪಟ್ಟ ಹನ್ನೊಂದನೆಯ ವರ್ಷದ
ಮೊದಲನೇ ತಿಂಗಳಿನ ಏಳನೇ ದಿವಸದಲ್ಲಿ ಯೆಹೋವನ
ಸಂದೇಶ ನನಗೆ ಬಂದಿತು. ಆತನು ಹೇಳಿದ್ದೇನೆಂದರೆ,
21‘‘ನರಪುತ್ರನೇ, ನಾನು ಈಜಿಪ್ಟಿನ ರಾಜನಾದ
ಫರೋಹನ ಕೈಯ ಬಲವನ್ನು ಮುರಿದಿದ್ದೇನೆ. ಯಾರೂ
ಅವನನ್ನು ಶುಶ್ರೂಷೆ ಮಾಡಲಾರರು. ಅದು ಗುಣ
ವಾಗದು. ಅವನ ಕೈಗೆ ಖಡ್ಗ ಹಿಡಿದುಕೊಳ್ಳುವಷ್ಟು ಬಲ
ವಿರದು.’’

22ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ,
‘‘ನಾನು ಈಜಿಪ್ಟಿನ ರಾಜನಾದ ಫರೋಹನಿಗೆ ವಿರುದ್ಧ
ವಾಗಿದ್ದೇನೆ. ಅವನ ಎರಡು ಕೈಗಳನ್ನೂ ಮುರಿಯುವೆನು.
ಒಂದು ಕೈ ಮುರಿಯಲ್ಪಟ್ಟಿತ್ತು. ಇನ್ನೊಂದು ಸರಿಯಾಗಿದ್ದ
ಕೈಯೂ ಮುರಿಯಲ್ಪಡುವದು. ಅವನ ಕೈಯಿಂದ ಖಡ್ಗವು
ಬಿಳುವಂತೆ ಮಾಡುವೆನು. 23ಈಜಿಪ್ಟಿನ ಜನರನ್ನು
ದೇಶಾಂತರ ಚದರಿಸಿ ಬಿಡುವೆನು. 24ಬಾಬಿಲೋನಿನ
ರಾಜನ ಕೈಗಳನ್ನು ನಾನು ಬಲಪಡಿಸುವೆನು. ನನ್ನ ಖಡ್ಗ
ವನ್ನು ನಾನು ಅವನ ಕೈಯಲ್ಲಿಡುವೆನು. ಆದರೆ ಫರೋಹನ
ಕೈಗಳನ್ನು ನಾನು ಮುರಿಯುವೆನು. ಆಗ ನೋವಿನಿಂದ
ಫರೋಹನು ಕಿರುಚುವನು. ಒಬ್ಬ ಸಾಯುವ ಮನುಷ್ಯನು
ಕಿರುಚುವಂತೆ ಆ ಶಬ್ದವು ಇರುವದು. 25ನಾನು ಬಾಬಿ
ಲೋನಿನ ರಾಜನ ಕೈಗಳನ್ನು ಬಲಪಡಿಸುವೆನು.
ಫರೋಹನ ಕೈಗಳು ಜೋಲುಬೀಳುವವು. ಆಗ ಅವರು
ನಾನೇ ಯೆಹೋವನೆಂದು ತಿಳಿಯುವರು.

‘‘ನನ್ನ ಖಡ್ಗವನ್ನು ನಾನು ಬಾಬಿಲೋನ್ ರಾಜನ
ಕೈಗಳಲ್ಲಿ ಇಡುವೆನು. ಆಗ ಅವನು ಈಜಿಪ್ಟಿನ ಕಡೆಗೆ
ಅದನ್ನು ಚಾಚುವನು. 26ನಾನು ಈಜಿಪ್ಟಿನ ಜನರನ್ನು
ದೇಶಾಂತರ ಚದರಿಸಿ ಬಿಡುವೆನು. ಆಗ ನಾನು
ಯೆಹೋವನೆಂದು ಅವರು ತಿಳಿದುಕೊಳ್ಳುವರು.’’

### ಅಶ್ಶೂರವು ದೇವದಾರು ಮರದಂತಿರುವದು

31 ಸೆರೆಹಿಡಿದ ಹನ್ನೊಂದನೇ ವರ್ಷದ ಮೂರನೇ
ತಿಂಗಳಿನ ಮೊದಲನೇ ದಿವಸದಲ್ಲಿ ಯೆಹೋ
ವನ ಸಂದೇಶ ನನಗೆ ಬಂದಿತು. ಆತನು ಹೇಳಿದ್ದೇನಂದರೆ,
2‘‘ನರಪುತ್ರನೇ, ಇದನ್ನು ಈಜಿಪ್ಟಿನ ರಾಜನಾದ
ಫರೋಹನಿಗೂ ಅವನ ಜನರಿಗೂ ಹೇಳು:

‘‘‘ನೀನು ಅತ್ಯಂತ ಪ್ರಭಾವಶಾಲಿ, ನಿನ್ನನ್ನು ಯಾರಿಗೆ
ಹೋಲಿಸಲಿ?
3 ಅಶ್ಶೂರವು ಲೆಬನೋನಿನಲ್ಲಿರುವ ದೇವದಾರು
ಮರದಂತೆ ಎತ್ತರವಾಗಿ, ಸುಂದರವಾದ ಕೊಂಬೆಗ
ಳಿಂದಲೂ ಕಾಡಿನ ನೆರಳಿನಲ್ಲಿಯೂ ಶೋಭಿಸು
ತ್ತದೆ. ಅದರ ಮೇಲ್ ತುದಿಯು ಮುಗಿಲನ್ನು
ಮುಟ್ಟುವದು.
4 ನೀರು ಆ ಮರವನ್ನು ಬೆಳೆಯುವಂತೆ ಮಾಡಿತು.
ನದಿಯು ಅದನ್ನು ಎತ್ತರವಾಗುವಂತೆ ಮಾಡಿತು.
ಆ ಮರವು ನೆಡಲ್ಪಟ್ಟ ಸ್ಥಳದ ಸುತ್ತಲೂ ಹೊಳೆಯು
ಹರಿಯುತ್ತಿದೆ. ಆ ಮರದಿಂದ ಬೇರೆ ಮರಗಳಿಗೆ
ಸಣ್ಣ ಕಾಲುವೆಗಳು ಹೊರಡುತ್ತವೆ.

5 ‘‘‘ಯಾಕೆಂದರೆ ಈ ಮರವು ಬೇರೆ ಮರಗಳಿಗಿಂತ
ಉನ್ನತವಾಗಿ ಕಾಣಿಸಿಕೊಳ್ಳಲು ಅದು ಅನೇಕ
ಕೊಂಬೆಗಳನ್ನು ಬಿಟ್ಟಿತು. ಬೇಕಾದಷ್ಟು ನೀರು ಅಲ್ಲಿ
ಇದ್ದುದರಿಂದ ಕೊಂಬೆಗಳು ಅಂದವಾಗಿ ಬೆಳೆದವು.
6 ಅದರ ಕೊಂಬೆಗಳಲ್ಲಿ ಆಕಾಶದ ಪಕ್ಷಿಗಳು ಗೂಡು
ಗಳನ್ನು ಕಟ್ಟಿದವು. ಆ ಮರದ ಅಡಿಯಲ್ಲಿ ಪ್ರಾಣಿ
ಗಳು ಮರಿಗಳನ್ನು ಈದವು. ಅ ಮರದ ನೆರಳಿನಲ್ಲಿ
ಎಲ್ಲಾ ದೊಡ್ಡ ಜನಾಂಗಗಳು ವಾಸಿಸಿದವು.

7 ಆ ಮರವು ಮನೋಹರವಾಗಿತ್ತು. ಅದು ದೊಡ್ಡ
ದಾಗಿತ್ತು. ಅದರ ಕೊಂಬೆಗಳು ವಿಶಾಲವಾಗಿದ್ದವು.
ಅದರ ಬೇರುಗಳಿಗೆ ಧಾರಳವಾದ ನೀರಿತ್ತು.
8 ದೇವರ ತೋಟದಲ್ಲಿರುವ ದೇವದಾರು ಮರ
ಗಳೂ ಈ ಮರದಷ್ಟು ಎತ್ತರವಾಗಿರಲಿಲ್ಲ. ಈ
ಮಹಾ ಮರಕ್ಕಿರುವಷ್ಟು ಕೊಂಬೆಗಳು ಸೈಪ್ರಸ್
ಮರಗಳಿಗೂ ಇಲ್ಲ. ದೇವರ ತೋಟದಲ್ಲಿದ್ದ
ಯಾವ ಮರವಾದರೂ ಇದರಷ್ಟು ಅಂದವಾಗಿರ
ಲಿಲ್ಲ.

9 ‘‘‘ನಾನು ಅದಕ್ಕೆ ಅನೇಕ ಕೊಂಬೆಗಳನ್ನು ಕೊಟ್ಟು
ಅಂದವಾಗಿ ಕಾಣುವಂತೆ ಮಾಡಿದೆನು. ದೇವರ
ತೋಟವಾಗಿರುವ ಏದೆನಿನಲ್ಲಿರುವ ಮರಗಳೆಲ್ಲಾ
ಅಸೂಯೆ ಪಡುತ್ತಿದ್ದವು.’’’

10ನನ್ನ ಒಡೆಯನಾದ ಯೆಹೋವನು ಹೀಗೆ ಹೇಳು
ತ್ತಾನೆ, ‘‘ಆ ಮರವು ಎತ್ತರವಾಗಿ ಬೆಳೆಯಿತು. ಅದರ ತುದಿ
ಮುಗಿಲನ್ನು ಮುಟ್ಟಿತು. ಇದು ಅದಕ್ಕೆ ಹೆಮ್ಮೆಯನ್ನು
ತಂದಿತು. 11ಆಗ ನಾನು ಒಬ್ಬ ಬಲಾಢ್ಯನಾದ ರಾಜನು
ಬಂದು ಆ ಮರವನ್ನು ತೆಗೆದುಕೊಳ್ಳುವಂತೆ ಮಾಡಿದೆನು.
ಆ ರಾಜನು ಮರವು ಮಾಡಿದ ದುಷ್ಟಕಾರ್ಯಗಳಿಗಾಗಿ
ಅದನ್ನು ಶಿಕ್ಷಿಸಿದನು. ಆ ಮರವನ್ನು ನಾನು ನನ್ನ ತೋಟ
ದಿಂದ ತೆಗೆದು ಹಾಕಿದೆನು. 12ಪರದೇಶದ ಕ್ರೂರ ಜನರು
ಅದನ್ನು ಕಡಿದು ಅದರ ರೆಂಬೆಗಳನ್ನೆಲ್ಲಾ ಬೆಟ್ಟ, ಬಯಲು,
ತಗ್ಗುಗಳಲ್ಲಿ ಚದರಿಸಿಬಿಟ್ಟರು. ಅದರ ಮುರಿಯಲ್ಪಟ್ಟ
ಕೊಂಬೆಗಳು ಆ ದೇಶದಲ್ಲಿ ಹರಿಯುವ ನದಿಯಲ್ಲಿ
ತೇಲಿದವು. ಆ ಮರದಡಿಯಲ್ಲಿ ಈಗ ನೆರಳು ಇಲ್ಲ.
ಆದುದರಿಂದ ಅಲ್ಲಿ ವಾಸವಾಗಿದ್ದ ಜನರೆಲ್ಲಾ ತೊಲಗಿ
ದರು. 13ಕೆಳಗೆ ಬಿದ್ದ ಮರದ ಮೇಲೆ ಪಕ್ಷಿಗಳೂ ವಾಸಿಸು
ವವು. ಕೆಳಗೆ ಬಿದ್ದ ಅದರ ಕೊಂಬೆಗಳ ಮೇಲೆ ಕಾಡು
ಪ್ರಾಣಿಗಳು ನಡೆದವು.

14‘‘ಈಗ ಆ ನೀರಿನ ಬಳಿಯಲ್ಲಿರುವ ಯಾವ ಮರ
ಗಳೂ ಹೆಮ್ಮೆ ಪಡುವದಿಲ್ಲ. ಅವು ಮುಗಿಲನ್ನು ಮುಟ್ಟಲು
ಪ್ರಯತ್ನಿಸುವದಿಲ್ಲ. ಚೆನ್ನಾಗಿ ಬೆಳೆದ ಮರಗಳು ಆ
ನೀರನ್ನು ಕುಡಿದು ತಾನು ಉದ್ದವಾಗಿ ಬೆಳೆದಿದ್ದೇನೆ ಎಂದು
ಕೊಚ್ಚಿಕೊಳ್ಳುವದಿಲ್ಲ. ಯಾಕೆಂದರೆ ಎಲ್ಲವೂ ಸಾಯಲ್ಪ
ಡುವದಕ್ಕಾಗಿ ನೇಮಕಗೊಂಡಿವೆ. ಅವುಗಳೆಲ್ಲಾ ಪಾತಾ
ಳಕ್ಕೆ, ಮರಣದ ಸ್ಥಳವನ್ನು ಸೇರುವವು. ಅಲ್ಲಿ ಸತ್ತು,
ಮರಣದ ಆ ಸ್ಥಳಕ್ಕೆ ಹೋಗಿ ಸೇರಿದವರನ್ನು ಸೇರುವದು.’

15ನನ್ನ ಒಡೆಯನಾದ ಯೆಹೋವನು ಇದನ್ನು ನುಡಿದಿ
ದ್ದಾನೆ. ‘‘ಆ ಮರವು ಪಾತಾಳಕ್ಕೆ ಹೋದ ದಿವಸದಲ್ಲಿ
ನಾನು ಜನರು ಅಳುವಂತೆ ಮಾಡಿದೆನು. ಅದನ್ನು ನಾನು
ಆಳವಾದ ಸಾಗರದಿಂದ ಮುಚ್ಚಿಬಿಟ್ಟೆನು. ನಾನು ಅದರ
ನದಿಗಳನ್ನೂ, ಬೇರೆ ನೀರಿನ ತೊರೆಗಳನ್ನೂ ನಿಲ್ಲಿಸಿ
ಬಿಟ್ಟೆನು. ಲೆಬನೋನ್ ಅದಕ್ಕಾಗಿ ಶೋಕಿಸುವಂತೆ
ಮಾಡಿದೆನು. ಆ ದೊಡ್ಡ ಮರವು ಹೋದುದಕ್ಕಾಗಿ ಆ
ಪ್ರಾಂತ್ಯದ ಬೇರೆ ಎಲ್ಲಾ ಮರಗಳು ದುಃಖದಿಂದ
ಕಾಯಿಲೆಯಲ್ಲಿ ಬಿದ್ದವು. 16ನಾನು ಆ ಮರವನ್ನು ಬೀಳಿಸಿ
ದೆನು. ಬೀಳುವ ಅದರ ಶಬ್ದವನ್ನು ಕೇಳಿ ರಾಜ್ಯಗಳೆಲ್ಲಾ
ಭಯದಿಂದ ನಡುಗಿದವು. ನಾನು ಆ ಮರವನ್ನು
ಪಾತಾಳಕ್ಕೆ ಕಳುಹಿಸಿದೆನು. ಆದು ಹೋಗಿ ಅದಕ್ಕಿಂತ
ಮೊದಲೇ ಆ ಆಳವಾದ ಗುಂಡಿಗೆ ಹೋಗಿರುವವ
ರೊಂದಿಗೆ ಸೇರಿಕೊಂಡಿತು. ಗತಿಸಿದ ದಿವಸಗಳಲ್ಲಿ ಏದೆನಿ
ನಲ್ಲಿದ್ದ ಎಲ್ಲಾ ಮರಗಳು, ಲೆಬನೋನಿನ ಉತ್ಕೃಷ್ಟ
ಮರಗಳು ಎಲ್ಲವೂ ಆ ನೀರನ್ನು ಕುಡಿದಿದ್ದವು. ಅವೆಲ್ಲವೂ
ಪಾತಾಳದಲ್ಲಿ ಒಟ್ಟು ಸೇರಿದವು. 17ಹೌದು, ಆ ಮರವೂ
ಅದರ ನೆರಳಿನ ಆಶ್ರಯವನ್ನು ಪಡೆದುಕೊಂಡಿದ್ದ ಅದರ
ಎಲ್ಲಾ ಸಂತತಿಗಳವರೂ, ಯುದ್ಧದಲ್ಲಿ ಸತ್ತುಹೋಗಿದ್ದ
ಸೈನಿಕರೊಂದಿಗೆ ಇರುವದಕ್ಕಾಗಿ ಪಾತಾಳಕ್ಕೆ ಇಳಿದು
ಹೋಗಿದ್ದವು. 18ಈಜಿಪ್ಟೇ, ಏದೆನಿನಲ್ಲಿ ಎಷ್ಟೋ ದೊಡ್ಡ,
ಬಲಶಾಲಿಯಾಗಿರುವ ಮರಗಳಿವೆ. ಅದರ ಯಾವ
ಮರಕ್ಕೆ ನಿನ್ನನ್ನು ಹೋಲಿಸಲಿ? ಅವೆಲ್ಲವೂ ಭೂಮಿಯ
ಕೆಳಗೆ ಪಾತಾಳವನ್ನು ಸೇರಿದವು. ನೀನು ಕೂಡಾ ಆ
ಪರದೇಶಸ್ಥರೊಂದಿಗೆ ಆ ಸ್ಥಳಕ್ಕೆ ಸೇರುವಿ. ರಣರಂಗದಲ್ಲಿ
ಸತ್ತವರೊಂದಿಗೆ ನೀನು ಬಿದ್ದುಕೊಳ್ಳುವಿ.

‘‘ಹೌದು, ಈ ರೀತಿಯಾಗಿ ಫರೋಹನಿಗೂ ಅವ
ನೊಂದಿಗಿರುವ ಜನರ ಗುಂಪಿಗೂ ಆಗುವದು.’’ ಇದು
ಒಡೆಯನಾದ ಯೆಹೋವನ ನುಡಿ.

### ಫರೋಹನು ಮೃಗರಾಜನೋ, ಪೇರ್ಮೊಸಳೆಯೋ?

32 ಸೆರೆಹಿಡಿದ ಹನ್ನೆರಡನೇ ವರ್ಷದ, ಹನ್ನೆರಡನೇ
ತಿಂಗಳಿನ ಮೊದಲನೇ ದಿವಸದಲ್ಲಿ ಯೆಹೋ
ವನ ಸಂದೇಶ ನನಗೆ ಬಂದಿತು. ಆತನು ಹೇಳಿದ್ದೇನೆಂದರೆ,
2‘‘ನರಪುತ್ರನೇ, ಈಜಿಪ್ಟಿನ ರಾಜನಾದ ಫರೋಹನಿಗೆ ಈ
ಶೋಕಗೀತೆಯನ್ನು ಹಾಡು. ಅವನಿಗೆ ಹೀಗೆ ಹೇಳು:

‘‘‘ಜನಾಂಗಗಳ ಮಧ್ಯೆ ಹೆಮ್ಮೆಯಿಂದ ನಡೆದಾಗ
ನಡೆದಾಡುತ್ತಿರುವ ಮೃಗರಾಜನಂತೆ ನೀನಿರುವಿ
ಎಂದು ನೀನು ಭಾವಿಸಿದ್ದಿ. ಆದರೆ ನಿಜವಾಗಿಯೂ
ನೀನು ಸರೋವರದಲ್ಲಿರುವ ಪೇರ್ಮೊಸಳೆಯಾಗಿ
ರುವಿ. ನೀರಿನ ಹೊಳೆಗಳಲ್ಲಿ ನೀನು ನಿನ್ನ ದಾರಿ
ಯನ್ನು ಮಾಡುತ್ತೀ. ನಿನ್ನ ಕಾಲುಗಳಿಂದ ಆ
ನೀರನ್ನು ಕೆಸರಾಗಿ ಮಾಡುತ್ತೀ. ನೀನು ಈಜಿಪ್ಟಿನ
ಹೊಳೆಗಳನ್ನು ಕದಡಿಸಿ ಬಿಡುತ್ತೀ.’’’

[3]ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:

‘‘ಅನೇಕರನ್ನು ನಾನು ಒಟ್ಟುಗೂಡಿಸಿದ್ದೇನೆ. ಈಗ
ನನ್ನ ಬಲೆಯನ್ನು ನಿನ್ನ ಮೇಲೆ ಬೀಸುವೆನು. ಆಗ
ಅವರು ನಿನ್ನನ್ನು ಒಳಸೆಳೆಯುವರು.
4 ಆಮೇಲೆ ನಿನ್ನನ್ನು ಒಣನೆಲದ ಮೇಲೆ ಹಾಕುವೆನು.
ಹೊಲದ ಮೇಲೆ ನಿನ್ನನ್ನು ಬಿಸಾಡಿ ಬಿಡುವೆನು.
ಎಲ್ಲಾ ಪಕ್ಷಿಗಳು ನಿನ್ನನ್ನು ತಿಂದು ಬಿಡುವಂತೆ
ಮಾಡುವೆನು. ಎಲ್ಲಾ ಕಡೆಗಳಿಂದ ಕಾಡು ಮೃಗ
ಗಳು ಬಂದು ನಿನ್ನನ್ನು ಹೊಟ್ಟೆತುಂಬಾ ತಿನ್ನುವಂತೆ
ಮಾಡುವೆನು.
5 ಪರ್ವತಗಳ ಮೇಲೆ ನಿನ್ನ ದೇಹವನ್ನು ಬಿಸಾಡು
ವೆನು. ಬಯಲು ಪ್ರದೇಶವನ್ನು ನಿನ್ನ ಹೆಣಗಳಿಂದ
ತುಂಬಿಸುವೆನು.
6 ನಿನ್ನ ರಕ್ತವನ್ನು ಪರ್ವತಗಳ ಮೇಲೆ ಚೆಲ್ಲುವೆನು.
ಅದು ನೆಲವನ್ನು ಒದ್ದೆ ಮಾಡುವದು ಹೊಳೆಗಳಲ್ಲಿ
ನೀನು ತುಂಬಿರುವಿ.
7 ನೀನು ಕಾಣೆಯಾಗುವಂತೆ ನಾನು ಮಾಡುವೆನು.
ಆಕಾಶವನ್ನು ಮುಚ್ಚಿ ನಕ್ಷತ್ರಗಳನ್ನು ಹೊಳೆಯ
ದಂತೆ ಮಾಡುವೆನು. ಸೂರ್ಯನನ್ನು ಮೋಡವು
ಮುಚ್ಚುವಂತೆ ಮಾಡುವೆನು. ಚಂದ್ರನು ಪ್ರಕಾಶಿಸ
ದಂತೆ ಮಾಡುವೆನು.
8 ನಿನ್ನ ಮೇಲೆ ಆಕಾಶದಲ್ಲಿ ಹೊಳೆಯುವ ಜ್ಯೋತಿ
ಗಳನ್ನು ಮಂಕುಗೊಳಿಸುವೆನು; ನಿನ್ನ ದೇಶದಲ್ಲಿ
ಕತ್ತಲನ್ನು ಬರಮಾಡುವೆನು.’’ ನನ್ನ ಒಡೆಯನಾದ
ಯೆಹೋವನು ಇವುಗಳನ್ನು ಹೇಳಿದನು.

[9]‘‘ನಿನ್ನನ್ನು ನಾಶಮಾಡಲು ನಾನು ನಿನ್ನ ಶತ್ರುವನ್ನು
ಬರಮಾಡುವಾಗ ಅನೇಕ ಜನರು ದುಃಖಿತರಾಗಿ ಗಲಿಬಿಲಿ
ಗೊಳ್ಳುವರು. ನಿನ್ನನ್ನು ಅರಿಯದ ರಾಜ್ಯದವರೂ ಗಲಿ
ಬಿಲಿಗೊಳ್ಳುವರು. [10]ಅನೇಕ ಮಂದಿ ನಿನಗೆ ಸಂಭವಿಸಿ
ದ್ದನ್ನು ನೋಡಿ ಚಕಿತರಾಗುವರು. ನಾನು ನಿನ್ನ ಕಡೆಗೆ ಖಡ್ಗ
ಬೀಸುವಾಗ ಅವರ ಅರಸರು ಬಹಳ ಭಯಗ್ರಸ್ತರಾಗು
ವರು; ನೀನು ಬೀಳುವ ದಿವಸದಲ್ಲಿ ಅರಸರು ಹೆದರಿ
ನಡುಗುವರು. ಪ್ರತಿಯೊಬ್ಬ ರಾಜನು ತನ್ನ ಜೀವವನ್ನು
ಉಳಿಸಿಕೊಳ್ಳಲು ಆತುರಪಡುವನು.’’
[11]ಯಾಕೆಂದರೆ ನನ್ನ ಒಡೆಯನಾದ ಯೆಹೋವನು
ಹೀಗೆ ಹೇಳುತ್ತಾನೆ, ‘‘ಬಾಬಿಲೋನಿನ ರಾಜನ ಖಡ್ಗವು
ನಿನ್ನೊಂದಿಗೆ ಯುದ್ಧಮಾಡಲು ಬರುವದು. [12]ಕ್ರೂರ
ರಾಷ್ಟ್ರಗಳ ಆ ಸೈನಿಕರಿಂದ ನಿನ್ನ ಜನರನ್ನು ಯುದ್ಧದಲ್ಲಿ
ಹತಗೊಳಿಸುವೆನು. ಈಜಿಪ್ಟಿನ ಜನರನ್ನೂ ಅವರು ಅವರು
ಹೆಮ್ಮೆಪಡುವಂತ ವಸ್ತುಗಳನ್ನೂ ಆ ಸೈನಿಕರು ನಾಶ
ಗೊಳಿಸುವರು. [13]ಈಜಿಪ್ಟಿನ ಹೊಳೆಯ ತೀರದಲ್ಲಿ ಅನೇಕ
ಪ್ರಾಣಿಗಳಿವೆ. ನಾನು ಅವುಗಳನ್ನು ನಾಶಮಾಡುವೆನು.
ಜನರು ಹೊಳೆಯ ನೀರನ್ನು ತಮ್ಮ ಕಾಲುಗಳಿಂದ
ಕೆಸರಾಗಿ ಇನ್ನು ಮಾಡಲಾರರು. ದನಗಳ ಗೊರಸುಗಳು
ನೀರನ್ನು ಕೆಸರನ್ನಾಗಿ ಮಾಡುವದಿಲ್ಲ. [14]ನಾನು ಈಜಿಪ್ಟಿನ
ನೀರನ್ನು ತಿಳಿಗೊಳಿಸುವೆನು; ಅದರ ನದಿಗಳು ಎಣ್ಣೆ
ಯಷ್ಟೇ ನಯವಾಗಿ ಹರಿಯುವಂತೆ ಮಾಡುವೆನು.’’ ನನ್ನ
ಒಡೆಯನಾದ ಯೆಹೋವನ ನುಡಿಗಳಿವು. [15]‘‘ಈಜಿಪ್ಟ್
ದೇಶವನ್ನು ನಾನು ಬರಿದು ಮಾಡುವೆನು. ಆ ದೇಶವು
ಎಲ್ಲವನ್ನು ಕಳೆದುಕೊಳ್ಳುವದು. ಈಜಿಪ್ಟಿನಲ್ಲಿ ವಾಸಿಸುವ
ಎಲ್ಲಾ ಜನರನ್ನು ನಾನು ಶಿಕ್ಷಿಸುವೆನು. ಆಗ ನಾನು
ಒಡೆಯನಾದ ಯೆಹೋವನು ಎಂದು ತಿಳುಕೊಳ್ಳುವರು.
[16]‘‘ಜನರು ಈಜಿಪ್ಟಿನ ಬಗ್ಗೆ ಈ ಶೋಕಗೀತೆಯನ್ನು
ಹಾಡುವರು. ಬೇರೆ ದೇಶಗಳಲ್ಲಿರುವ ಹೆಣ್ಣುಮಕ್ಕಳು ಈ
ಶೋಕ ಗೀತೆಯನ್ನು ಹಾಡುವರು.’’ ನನ್ನ ಒಡೆಯನಾದ
ಯೆಹೋವನ ನುಡಿಗಳಿವು.

### ಈಜಿಪ್ಟ್ ನಾಶವಾಗಲಿದೆ

[17]ಸೆರೆಹಿಡಿಯಲ್ಪಟ್ಟ ಹನ್ನೆರಡನೆ ವರ್ಷದ, ಹನ್ನೆರಡನೆ
ತಿಂಗಳಿನ, ಹದಿನೈದನೆಯ ದಿನದಲ್ಲಿ ಯೆಹೋವನ
ಮಾತುಗಳು ನನಗೆ ಬಂದವು. ಆತನು ಹೇಳಿದ್ದೇನೆಂದರೆ,
[18]‘‘ನರಪುತ್ರನೇ, ಈಜಿಪ್ಟಿನ ಜನರಿಗಾಗಿ ಗೋಳಾಡು.
ಪಾತಾಳಕ್ಕೆ ಇಳಿದುಹೋಗಿರುವ ಇತರ ಎಲ್ಲರೊಡನೆ
ಇರುವದಕ್ಕಾಗಿ ಈಜಿಪ್ಟನ್ನು ಮತ್ತು ಇತರ ಜನಾಂಗಗಳ
ಉಳಿದ ಪಟ್ಟಣಗಳನ್ನು * ಸಮಾಧಿಗೆ ಕಳುಹಿಸು.
[19]‘‘ಈಜಿಪ್ಟೇ, ನೀನು ಬೇರೆಯವರಿಗಿಂತ ಉತ್ತಮ
ವೇನೂ ಅಲ್ಲ. ಮರಣದ ಸ್ಥಳಕ್ಕೆ ಹೋಗು. ಅಲ್ಲಿ ಪರ
ದೇಶದವರೊಂದಿಗೆ ಹೋಗಿ ಬಿದ್ದುಕೋ.
[20]‘‘ರಣರಂಗದಲ್ಲಿ ಮಡಿದ ಜನರೊಂದಿಗೆ ಈಜಿಪ್ಟ್
ಹೋಗುವದು. ಶತ್ರುಗಳು ಆಕೆಯನ್ನೂ ಆಕೆಯ
ಜನರನ್ನೂ ಎಳೆದುಬಿಟ್ಟಿದ್ದಾರೆ.
[21]‘‘ಶೂರರು, ಬಲಶಾಲಿಗಳು ಯುದ್ಧದಲ್ಲಿ ಮಡಿದಿ
ದ್ದಾರೆ, ಆ ಪರದೇಶಿಗಳು ಮರಣದ ಸ್ಥಳಕ್ಕೆ ಹೋದರು.
ಅಲ್ಲಿದ್ದುಕೊಂಡು ಈಜಿಪ್ಟಿನವರೊಂದಿಗೆ ಮತ್ತು ಅದರ
ಸಹಾಯಕರೊಂದಿಗೆ ಮಾತನಾಡುವರು.
[22-23]‘‘ಅಶ್ಶೂರವೂ ಅದರ ಎಲ್ಲಾ ಸೈನ್ಯವೂ ಆ ಪಾತಾಳ
ದಲ್ಲಿರುವದು. ಅವರ ಸ್ಥಳವು ಆಳವಾದ ಗುಂಡಿಯಲ್ಲಿರು
ವದು. ಆ ಅಶ್ಶೂರದ ಸೈನಿಕರೆಲ್ಲಾ ರಣರಂಗದಲ್ಲಿ ಮಡಿದ
ವರೇ. ಅವರ ಸಮಾಧಿಗಳು ಅಶ್ಶೂರದ ಸಮಾಧಿಯ
ಸುತ್ತಮುತ್ತ ಇವೆ. ಅವರು ಜೀವಂತರಾಗಿರುವಾಗ ಜನ
ರನ್ನು ಭೀತಿಗೊಳಿಸುತ್ತಿದ್ದರು. ಆದರೆ ಈಗ ಮೌನ
ವಾಗಿದ್ದಾರೆ. ಅವರೆಲ್ಲಾ ಯುದ್ಧದಲ್ಲಿ ಸತ್ತರು.

---

**ಪಟ್ಟಣಗಳು** ಅಕ್ಷರಶಃ ‘ಹೆಣ್ಣುಮಕ್ಕಳು.’’

24‘‘ಏಲಾಮು ಕೂಡಾ ಅಲ್ಲಿದೆ. ಆಕೆಯ ಸೈನ್ಯವೆಲ್ಲಾ
ಆಕೆಯ ಸಮಾಧಿಯ ಸುತ್ತಲಿದೆ. ಅವರೆಲ್ಲಾ ಯುದ್ಧದಲ್ಲಿ
ಮಡಿದರು. ಆ ಪರದೇಶದವರು ಪಾತಾಳವನ್ನು ಸೇರಿ
ದರು. ಅವರು ಜೀವಿಸಿದ್ದಾಗ ಜನರನ್ನು ಭಯ
ಗೊಳಿಸಿದರು. ಆದರೆ ಈಗ ನಾಚಿಕೆಯೊಂದಿಗೆ ಅವರು
ಪಾತಾಳವನ್ನು ಸೇರಿದರು. 25ಏಲಾಮ್ ಮತ್ತು ಯುದ್ಧ
ದಲ್ಲಿ ಮಡಿದ ಅದರ ಎಲ್ಲಾ ಸೈನಿಕರಿಗೂ ಅಲ್ಲಿ ಅವರು
ಹಾಸಿಗೆಯನ್ನು ಮಾಡಿದರು. ಏಲಾಮಿನ ಸೈನ್ಯವು ಅದರ
ಸಮಾಧಿಯ ಸುತ್ತಲೂ ಇವೆ. ಅವರೆಲ್ಲಾ ರಣರಂಗದಲ್ಲಿ
ಸತ್ತವರು. ಅವರು ಜೀವದಿಂದಿರುವಾಗ ಜನರನ್ನು ಹೆದರಿ
ಸಿದ್ದರು. ಆದರೆ ಅವರೀಗ ತಮ್ಮ ನಾಚಿಕೆಯೊಂದಿಗೆ
ಪಾತಾಳ ಸೇರಿದ್ದಾರೆ. ಅವರು ಬೇರೆ ಸತ್ತವರೊಂದಿಗೆ
ಸೇರಿರುತ್ತಾರೆ.

26‘‘ಮೆಷಕ್ ತೂಬಲ್ ಮತ್ತು ಅವರ ಎಲ್ಲಾ
ಸೈನ್ಯದವರು ಅಲ್ಲಿದ್ದಾರೆ. ಅವರ ಸಮಾಧಿಗಳು ಸುತ್ತಲೂ
ಇವೆ. ಅವರೆಲ್ಲಾ ಯುದ್ಧದಲ್ಲಿ ಸತ್ತವರು. ಅವರು ಜೀವಿಸಿ
ದ್ದಾಗ ಜನರಿಗೆ ಹೆದರಿಕೆಯನ್ನುಂಟು ಮಾಡಿದ್ದರು. 27ಈಗ
ಅವರು ಬಹಳ ಕಾಲದ ಹಿಂದೆ ಸತ್ತ ವೀರರೊಂದಿಗೆ
ಬಿದ್ದುಕೊಂಡಿದ್ದಾರೆ. ಅವರು ತಮ್ಮ ಆಯುಧಗಳೊಂದಿಗೆ
ಹೂಣಿಡಲ್ಪಟ್ಟರು. ಅವರ ತಲೆಯ ಕೆಳಗೆ ಅವರ ಕತ್ತಿಯು
ಇಡಲ್ಪಟ್ಟಿತ್ತು. ಆದರೆ ಅವರ ಪಾಪವು ಅವರ ಎಲುಬು
ಗಳಲ್ಲಿವೆ. ಯಾಕೆಂದರೆ ಅವರು ಜೀವಿಸಿದ್ದಾಗ ಜನರನ್ನು
ಭಯಪಡಿಸಿದರು.

28‘‘ಈಜಿಪ್ಟೇ, ನೀನೂ ನಾಶಮಾಡಲ್ಪಡುವಿ. ನೀನೂ
ಆ ಪರದೇಶದವರೊಂದಿಗೆ ಬಿದ್ದುಕೊಂಡಿರುವಿ. ಯುದ್ಧ
ದಲ್ಲಿ ಸತ್ತ ಸೈನಿಕರೊಂದಿಗೆ ನೀನು ಮಲಗುವಿ.

29‘‘ಎದೋಮನೂ ಅಲ್ಲಿರುವನು. ಅವನ ರಾಜರೂ
ಹಿರಿಯರೂ ಅಲ್ಲಿರುವರು. ಅವರೆಲ್ಲಾ ವೀರರಾಗಿದ್ದರೂ
ಈ ಬೇರೆ ಜನರೊಂದಿಗೆ ಮಲಗಿದ್ದಾರೆ; ಆ ಪರದೇಶ
ದವರೊಂದಿಗೆ ಪಾತಾಳದಲ್ಲಿ ಬಿದ್ದುಕೊಂಡಿದ್ದಾರೆ.

30‘‘ಉತ್ತರ ದೇಶದ ನಾಯಕರೆಲ್ಲಾ ಅಲ್ಲಿದ್ದಾರೆ.
ಚೀದೋನಿನ ಸೈನಿಕರೂ ಅಲ್ಲಿದ್ದಾರೆ. ಅವರ ಬಲವು
ಜನರನ್ನು ಭಯಗ್ರಸ್ತರನ್ನಾಗಿ ಮಾಡಿತ್ತು. ಅವರೂ ಈಗ
ಯುದ್ಧದಲ್ಲಿ ಮಡಿದ ಇತರರೊಂದಿಗೆ ಬಿದ್ದುಕೊಂಡಿ
ದ್ದಾರೆ. ತಮ್ಮ ನಾಚಿಕೆಯೊಂದಿಗೆ ಪಾತಾಳವನ್ನು
ಸೇರಿದ್ದಾರೆ.

31‘‘ಪಾತಾಳಕ್ಕೆ ಸೇರಿದ ಜನರನ್ನು ಫರೋಹನು
ನೋಡುವನು. ಅವನೂ ಅವನೊಂದಿಗಿರುವ ಜನರೂ
ಸಮಾಧಾನ ಹೊಂದುವರು. ಹೌದು, ಫರೋಹನೂ
ಅವನ ಎಲ್ಲಾ ಸೈನಿಕರೂ ಯುದ್ಧದಲ್ಲಿ ಸಾಯುವರು.’’
ಇದು ಒಡೆಯನಾದ ಯೆಹೋವನ ನುಡಿ.

32‘‘ಫರೋಹನು ತನ್ನ ಕಾಲದಲ್ಲಿ ಜನರನ್ನು ಭಯ
ಗೊಳಿಸಿದ್ದನು. ಈಗಲಾದರೊ ಫರೋಹನೂ ಅವನ
ಸೈನಿಕರೂ ಪರದೇಶದವರೊಂದಿಗೆ ಬಿದ್ದುಕೊಳ್ಳುವರು.’’
ನನ್ನ ಒಡೆಯನಾದ ಯೆಹೋವನ ನುಡಿಗಳಿವು.

## ಇಸ್ರೇಲಿನ ಕಾವಲುಗಾರನಾಗಿ ದೇವರು ಯೆಹೆಜ್ಕೇಲನನ್ನು ಆರಿಸಿದ್ದು

33 ಯೆಹೋವನ ಸಂದೇಶವು ನನಗೆ ಬಂದಿತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ, ನಿನ್ನ
ಜನರೊಂದಿಗೆ ಮಾತನಾಡು. ಅವರಿಗೆ ಹೀಗೆ ಹೇಳು,
‘ನಾನು ಈ ದೇಶದೊಂದಿಗೆ ಯುದ್ಧ ಮಾಡಲು ಶತ್ರು
ಸೈನಿಕರನ್ನು ಬರಮಾಡುತ್ತೇನೆ. ಈ ಸಮಯದಲ್ಲಿ ಜನರು
ಒಬ್ಬ ಕಾವಲುಗಾರನನ್ನು ಆರಿಸುವರು. 3ಈತನು ಶತ್ರು
ಸೈನ್ಯವನ್ನು ನೋಡಿದಾಕ್ಷಣ ತನ್ನ ತುತ್ತೂರಿಯನ್ನೂದಿ
ಜನರನ್ನು ಎಚ್ಚರಿಸುವನು. 4ಜನರು ಅದನ್ನು ಕೇಳಿದರೂ
ಅಲಕ್ಷ್ಯ ಮಾಡಿದಾಗ ಶತ್ರುವು ಬಂದು ಅವರನ್ನು ಸೆರೆ
ಹಿಡಿದು ಕೈದಿಗಳನ್ನಾಗಿ ಮಾಡಿ ಕೊಂಡೊಯ್ಯುವನು. ಆಗ
ಅವನ ಮರಣಕ್ಕೆ ಅವನೇ ಕಾರಣನಾಗುವನು. 5ಅವನು
ತುತ್ತೂರಿಯ ಶಬ್ದ ಕೇಳಿದನು. ಆದರೆ ಅದನ್ನು ಅಲಕ್ಷಿಸಿ
ದನು. ಆದುದರಿಂದ ಅವನ ಮರಣಕ್ಕೆ ಅವನೇ
ಕಾರಣನು. ಅವನು ಆ ಎಚ್ಚರಿಕೆಯ ಶಬ್ದಕ್ಕೆ ಗಮನವನ್ನು
ಕೊಟ್ಟಿದ್ದರೆ ಅವನು ಬದುಕುತ್ತಿದ್ದನು.

6‘‘‘ಆದರೆ ಆ ಕಾವಲುಗಾರನು ವೈರಿಯು ಬರುವಂತ
ದ್ದನ್ನು ಕಂಡರೂ ತುತ್ತೂರಿಯನ್ನು ಊದದೆ ಹೋದರೆ
ಜನರು ಎಚ್ಚರದಲ್ಲಿರದ ಕಾರಣ ವೈರಿಯು ಅವರನ್ನು ಸೆರೆ
ಹಿಡಿದು ಕೈದಿಗಳನ್ನಾಗಿ ಮಾಡಿ ಕೊಂಡೊಯ್ಯುವನು. ಆ
ಮನುಷ್ಯನು ಪಾಪಮಾಡಿದ್ದರಿಂದ ಆ ಶಿಕ್ಷೆಯು ಅವನಿಗೆ
ದೊರಕಿತು. ಆದರೆ ಕಾವಲುಗಾರನು ಕೂಡಾ ಅವನ
ಮರಣಕ್ಕೆ ಕಾರಣನಾಗುವನು.’

7‘‘ಈಗ, ನರಪುತ್ರನೇ, ನಾನು ನಿನ್ನನ್ನು ಇಸ್ರೇಲಿನ
ಕಾವಲುಗಾರನನ್ನಾಗಿ ಆರಿಸಿದ್ದೇನೆ. ನನ್ನ ಬಾಯಿಂದ
ನೀನು ಸಂದೇಶವನ್ನು ಕೇಳಿದಾಗ, ನನ್ನ ಪರವಾಗಿ ನೀನು
ಜನರನ್ನು ಎಚ್ಚರಿಸಬೇಕು. 8‘ಈ ಕೆಟ್ಟ ಮನುಷ್ಯನು
ಸಾಯುವನು’ ಎಂದು ನಾನು ಹೇಳಿದರೆ, ನೀನು ಹೋಗಿ
ಆ ಮನುಷ್ಯನನ್ನು ಎಚ್ಚರಿಸಬೇಕು. ಆದರೆ ನೀನು
ಅವನನ್ನು ಎಚ್ಚರಿಸದೆ, ಅವನ ಜೀವಿತವನ್ನು ಬದಲಾಯಿ
ಸಲು ಹೇಳದೆ, ಪಾಪಮಾಡಬೇಡ ಎಂದು ನೀನು ಹೇಳದೆ
ಹೋದರೆ, ಆ ದುಷ್ಟನು ಸಾಯುವನು. ಯಾಕೆಂದರೆ,
ಅವನು ಪಾಪಮಾಡಿದವನು. ಆದರೆ ಅವನ ಮರಣಕ್ಕೆ
ನಿನ್ನನ್ನು ಕಾರಣನನ್ನಾಗಿ ಮಾಡುತ್ತೇನೆ. 9ಆದರೆ ನೀನು
ಅವನನ್ನು ಎಚ್ಚರಿಸಿ, ಅವನ ಜೀವಿತವನ್ನು ಬದಲಾ
ಯಿಸಲು ಹೇಳಿ, ಪಾಪವನ್ನು ಮಾಡಬೇಡ ಎಂದು

ಹೇಳಿದರೂ ಅವನ ಕೇಳದೆ ಹೋದರೆ ಪಾಪ ಮಾಡುವದನ್ನು ಬಿಡದೆ ಹೋದರೆ ಅವನು ಪಾಪ ಮಾಡಿದುದರಿಂದ ಸಾಯುವನು. ಆದರೆ ನೀನು ಅವನ ಮರಣಕ್ಕೆ ಕಾರಣನಾಗುವದಿಲ್ಲ.

### ದೇವರು ಮನುಷ್ಯರನ್ನು ನಾಶಮಾಡಲು ಇಷ್ಟಪಡುವದಿಲ್ಲ

10‘‘ಆದುದರಿಂದ ನರಪುತ್ರನೇ, ನನ್ನ ಪರವಾಗಿ ಇಸ್ರೇಲ್ ಜನರೊಂದಿಗೆ ಮಾತನಾಡು.‘ನಾವು ಪಾಪ ಮಾಡಿದ್ದೇವೆ. ಕಟ್ಟಳೆಗಳನ್ನು ಮೀರಿದ್ದೇವೆ. ನಮ್ಮ ಪಾಪಗಳು ಹೊರಲಾರದಷ್ಟು ಭಾರವಾಗಿವೆ. ನಾವು ಆ ಪಾಪಗಳಿಂದಾಗಿ ಕ್ಷೀಣಿಸುತ್ತಿದ್ದೇವೆ. ನಾವು ಜೀವಿಸಬೇಕಾದರೆ ಏನು ಮಾಡಬೇಕು?’ ಎಂದು ಅವರು ಕೇಳಿಯಾರು.

11‘‘ಆಗ ನೀನು ಅವರಿಗೆ ಹೀಗೆ ಹೇಳಬೇಕು, ‘ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ: ನನ್ನ ಜೀವದಾಣೆ, ನಾನು ಜನರು ಸಾಯುವುದನ್ನು ನೋಡಲು ಇಷ್ಟಪಡುವದಿಲ್ಲ; ದುಷ್ಟರು ಸಾಯುವದರಲ್ಲಿಯೂ ನನಗೆ ಇಷ್ಟವಿಲ್ಲ. ಆ ದುಷ್ಟರು ನನ್ನ ಕಡೆಗೆ ತಿರುಗಬೇಕೆಂದು ನಾನು ಇಷ್ಟಪಡುತ್ತೇನೆ. ಅವರು ತಮ್ಮ ದುರ್ನಡತೆಯನ್ನು ಬಿಟ್ಟು ನಿಜವಾದ ಜೀವನವನ್ನು ನಡಿಸಬೇಕು. ಆದುದರಿಂದ ನನ್ನ ಬಳಿಗೆ ಹಿಂದಿರುಗಿ ಬನ್ನಿರಿ. ದುಷ್ಟತನವನ್ನು ಬಿಟ್ಟುಬಿಡಿರಿ. ಇಸ್ರೇಲ್ ಜನರೇ, ನೀವು ಯಾಕೆ ಸಾಯುತ್ತೀರಿ?’

12‘‘ನರಪುತ್ರನೇ, ನಿನ್ನ ಜನರಿಗೆ ಹೀಗೆ ಹೇಳು: ‘ಒಬ್ಬನು ಒಳ್ಳೆಯವನಾಗಿದ್ದುಕೊಂಡು ನಂತರ ದುಷ್ಟತನವನ್ನು ನಡಿಸಿದರೆ ಅವನ ಸತ್ಕಾರ್ಯಗಳು ಅವನನ್ನು ರಕ್ಷಿಸಲಾರವು. ಒಬ್ಬನು ದುಷ್ಟಕಾರ್ಯಗಳನ್ನು ಮಾಡಿ ತನ್ನ ದುಷ್ಟತ್ವದಿಂದ ತಿರುಗಿದರೆ ಅವನು ನಾಶವಾಗುವದಿಲ್ಲ. ಆದುದರಿಂದ ಹಿಂದೆ ಮಾಡಿದ್ದ ಪುಣ್ಯಕಾರ್ಯಗಳು ಒಬ್ಬ ಪಾಪಿಯನ್ನು ರಕ್ಷಿಸಲಾರದೆಂಬುದನ್ನು ಜ್ಞಾಪಕದಲ್ಲಿಟ್ಟುಕೋ.’

13‘‘ಒಂದು ವೇಳೆ ‘ನೀನು ಜೀವಿಸುವಿ’ ಎಂದು ಒಬ್ಬ ಒಳ್ಳೇ ಮನುಷ್ಯನಿಗೆ ನಾನು ಹೇಳೀನು. ಅವನು ತಾನು ಮಾಡಿದ ಒಳ್ಳೇ ಕಾರ್ಯಗಳ ನಿಮಿತ್ತ ತಾನು ರಕ್ಷಿಸಲ್ಪಟ್ಟಿದ್ದೇನೆ ಎಂದು ನೆನಸಿಯಾನು. ಆ ಬಳಿಕ ದುಷ್ಟಕಾರ್ಯಗಳನ್ನು ಮಾಡಲು ನಾನು ಅವನ ಪುಣ್ಯಕಾರ್ಯಗಳನ್ನು ನೋಡದೆ ಅವನ ದುಷ್ಟಕಾರ್ಯಗಳ ನಿಮಿತ್ತ ಅವನನ್ನು ಸಾಯಿಸುವೆನು.

14‘‘ಒಂದು ವೇಳೆ ನಾನು ಒಬ್ಬ ದುಷ್ಟನಿಗೆ ನೀನು ಸಾಯುವಿ ಎಂದು ಹೇಳಿದರೆ ಅವನು ತನ್ನ ಜೀವಿತವನ್ನು ಬದಲಾಯಿಸಿ, ದುಷ್ಟತ್ವವನ್ನು ನಿಲ್ಲಿಸಿ, ಅವನು ನೀತಿ
ವಂತನಾಗಿ ಬಾಳಿ
15ಒತ್ತೆ ತೆಗೆದುಕೊಂಡಿದ್ದ ವಸ್ತುಗಳನ್ನು ಹಿಂದಕ್ಕೆ ಕೊಟ್ಟು, ತಾನು ಕದ್ದುಕೊಂಡದ್ದನ್ನು ಹಿಂದಕ್ಕೆ ಕೊಟ್ಟು, ಜೀವಕರವಾದ ಕಟ್ಟಳೆಗಳನ್ನು ಅನುಸರಿಸಿದರೆ ಆ ಮನುಷ್ಯನು ಖಂಡಿತವಾಗಿ ಬದುಕುವನು. ಅವನನ್ನು ಸಾಯಿಸುವದಿಲ್ಲ.
16ಅವನು ಹಿಂದೆ ಮಾಡಿದ ದುಷ್ಟ ಕಾರ್ಯಗಳನ್ನು ನಾನು ನನ್ನ ನೆನಪಿಗೆ ತರುವದಿಲ್ಲ. ಯಾಕೆಂದರೆ ಈಗ ಅವನು ಶಿಷ್ಟನಾಗಿ ಬಾಳುತ್ತಿದ್ದಾನೆ. ಆದುದರಿಂದ ಅವನು ಜೀವಿಸುವನು.

17‘‘ಆದರೆ ನಿನ್ನ ಜನರು, ‘ಅದು ನ್ಯಾಯವಲ್ಲ. ನನ್ನ ಒಡೆಯನಾದ ಯೆಹೋವನು ಹಾಗೆ ಮಾಡಲಾರನು’ ಎಂದು ಹೇಳುವರು.

‘‘ಅಂಥ ಜನರೇ ನ್ಯಾಯವಂತರಲ್ಲ. ಅವರೇ ಬದಲಾಗಬೇಕು.
18ಒಬ್ಬ ಒಳ್ಳೇ ಮನುಷ್ಯನು ತನ್ನ ಶಿಷ್ಟತ್ವವನ್ನು ಬಿಟ್ಟು ಪಾಪದ ಮಾರ್ಗದಲ್ಲಿ ನಡೆದರೆ ಅವನು ಅವನ ಪಾಪಗಳ ನಿಮಿತ್ತ ಸಾಯುವನು.
19ಆದರೆ ಒಬ್ಬ ಪಾಪಿ ತನ್ನ ದುಷ್ಟತನವನ್ನು ಬಿಟ್ಟು ನೀತಿವಂತನಾಗಿ ಬಾಳಿದರೆ ಅವನು ಜೀವಿಸುವನು.
20ಆದರೆ ನೀವು ನಾನು ನ್ಯಾಯವಂತನಲ್ಲ ಎಂದು ಹೇಳುತ್ತೀರಿ. ಆದರೆ ನಾನು ಖಂಡಿತವಾಗಿ ಹೇಳು ತ್ತೇನೆ, ಇಸ್ರೇಲ್ ವಂಶದವರೇ, ಪ್ರತಿಯೊಬ್ಬನೂ ತಾನು ಮಾಡಿದ ಕಾರ್ಯಗಳಿಗಾಗಿ ನ್ಯಾಯ ಹೊಂದುವನು.’’

### ಜೆರುಸಲೇಮ್ ವಶ ಮಾಡಲ್ಪಟ್ಟಿತು

21ಸೆರೆಯ ಹನ್ನೆರಡನೆಯ ವರ್ಷದ ಹತ್ತನೆಯ ತಿಂಗಳಿನ ಐದನೇ ದಿವಸದಲ್ಲಿ ಜೆರುಸಲೇಮಿನಿಂದ ಒಬ್ಬನು ನನ್ನ ಬಳಿಗೆ ಬಂದನು. ಅವನು ರಣರಂಗದಿಂದ ತಪ್ಪಿಸಿಕೊಂಡು ಬಂದಾತನು. ಅವನು ‘‘ನಗರವು ಪರಾಧೀನವಾಯಿತು’’ ಎಂದು ಹೇಳಿದನು.

22ಅವನು ಬರುವ ಹಿಂದಿನ ದಿವಸದ ಸಾಯಂಕಾಲ ನನ್ನ ಒಡೆಯನಾದ ಯೆಹೋವನ ಆತ್ಮನಿಂದ ಪರವಶನಾದೆನು. ದೇವರು ನನ್ನನ್ನು ಮಾತನಾಡದಂತೆ ಮಾಡಿದ್ದನು. ಆ ಸಮಯದಲ್ಲಿ ಆ ಮನುಷ್ಯನು ನನ್ನ ಬಳಿಗೆ ಬಂದನು. ಆಗ ದೇವರು ನನ್ನ ಬಾಯನ್ನು ತೆರೆದು ನಾನು ಮಾತನಾಡುವಂತೆ ಮಾಡಿದನು.
23ಆಗ ಆತನ ಸಂದೇಶ ನನಗೆ ಬಂತು. ಆತನು ಹೇಳಿದ್ದೇನೆಂದರೆ,
24‘‘ನರಪುತ್ರನೇ, ಕೆಡವಲ್ಪಟ್ಟು ಹಾಳು ಬಿದ್ದ ಪಟ್ಟಣಗಳಲ್ಲಿ ಇಸ್ರೇಲ್ ಜನರು ವಾಸಿಸುತ್ತಿದ್ದಾರೆ. ಅವರು ಹೇಳುವದೇನೆಂದರೆ, ‘ಅಬ್ರಹಾಮನು ಒಬ್ಬನೇ. ಈ ದೇಶವನ್ನೆಲ್ಲಾ ದೇವರು ಅವನಿಗೆ ಕೊಟ್ಟನು. ನಾವು ಈಗ ಬಹಳ ಮಂದಿ ಇದ್ದೇವೆ. ಆದುದರಿಂದ ಖಂಡಿತವಾಗಿ ಈ ದೇಶ ನಮಗೇ ಸೇರಿದ್ದಾಗಿದೆ.’

25‘‘ನೀನು ಅವರಿಗೆ ಹೀಗೆ ಹೇಳಬೇಕು. ನಿಮ್ಮ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ: ‘ನೀವು ರಕ್ತವಿರುವ

ಮಾಂಸವನ್ನು ಭುಜಿಸುತ್ತೀರಿ. ನಿಮ್ಮ ಸಹಾಯಕ್ಕಾಗಿ ನೀವು
ವಿಗ್ರಹಗಳಿಗೆ ಮೊರೆಯಿಡುತ್ತೀರಿ. ನೀವು ನರಹತ್ಯೆ
ಮಾಡುತ್ತೀರಿ. ಹೀಗೆ ಇರುವದರಿಂದ ನಾನು ಈ ದೇಶ
ವನ್ನು ನಿಮಗೆ ಹೇಗೆ ಕೊಡಲಿ? 26ನೀವು ನಿಮ್ಮ ಕತ್ತಿಯ
ಮೇಲೆ ಭರವಸೆಯಿಡುತ್ತೀರಿ. ಪ್ರತಿಯೊಬ್ಬನು ಭಯಂ
ಕರವಾದ ಕೃತ್ಯಗಳನ್ನು ನಡಿಸುತ್ತಾನೆ. ನಿಮ್ಮ ನೆರೆಯವನ
ಹೆಂಡತಿಯೊಂದಿಗೆ ಸಂಭೋಗಿಸುವಿರಿ. ಆದುದರಿಂದ
ನೀವು ಈ ದೇಶವನ್ನು ಹೊಂದಲಾರಿರಿ.'

27"'ನೀನು ಅವರಿಗೆ ನಿಮ್ಮ ಒಡೆಯನಾದ
ಯೆಹೋವನು ಹೀಗೆ ಹೇಳಿದನೆಂದು ತಿಳಿಸಬೇಕು, "ನನ್ನ
ಜೀವದಾಣೆ, ಕೆಡವಲ್ಪಟ್ಟ ಪಟ್ಟಣಗಳಲ್ಲಿ ವಾಸಿಸುವ ಜನರು
ಕೊಲ್ಲಲ್ಪಡುವರು. ಯಾವನಾದರೂ ಪಟ್ಟಣದ ಹೊರಗೆ
ಹೋಗಿದ್ದಲ್ಲಿ ಅವನನ್ನು ಕಾಡುಪ್ರಾಣಿಗಳು ತಿನ್ನುವಂತೆ
ಮಾಡುವೆನು. ಯಾರಾದರೂ ಕೋಟೆಯೊಳಗಾಗಲೀ,
ಗುಹೆಯೊಳಗಾಗಲೀ ಸೇರಿಕೊಂಡರೆ ಅವರು ರೋಗ
ದಿಂದ ಸಾಯುವರು. 28ನಾನು ಈ ದೇಶವನ್ನು ಬರಿ
ದಾಗಿಯೂ ಬಂಜರು ಭೂಮಿಯನ್ನಾಗಿಯೂ ಮಾಡು
ವೆನು. ಈ ದೇಶವು ಹೆಮ್ಮೆ ಪಟ್ಟುಕೊಳ್ಳುತ್ತಿದ್ದ ವಿಷಯಗಳ
ನ್ನೆಲ್ಲಾ ಅವರು ಕಳೆದುಕೊಳ್ಳುವರು. ಇಸ್ರೇಲಿನ ಪರ್ವತ
ಗಳು ಬೋಳುಗುಡ್ಡಗಳಾಗುವವು. ಯಾರೂ ಅದನ್ನು
ದಾಟಿ ಹೋಗಲಾರರು. 29ಅವರು ಅನೇಕ ಭಯಂಕರ
ಕೃತ್ಯಗಳನ್ನು ಮಾಡಿದ್ದಾರೆ.ಆದುದರಿಂದ ಅವರ ರಾಜ್ಯ
ವನ್ನು ಬಂಜರುಭೂಮಿಯನ್ನಾಗಿ ಮಾಡುವೆನು. ಆಗ ಈ
ಜನರು ನಾನು ಯೆಹೋವನೆಂದು ತಿಳಿದು ಕೊಳ್ಳುವರು."

30"'ನರಪುತ್ರನೇ, ನಿನ್ನ ವಿಷಯದಲ್ಲಿ ನಿನ್ನ ಜನರು
ಗೋಡೆಗೆ ಒರಗಿಕೊಂಡೂ ಬಾಗಿಲಿನ ನಡುವೆ ನಿಂತು
ಕೊಂಡೂ ಮಾತನಾಡಿಕೊಳ್ಳುತ್ತಿದ್ದಾರೆ. ಅವರು ಒಬ್ಬರಿ
ಗೊಬ್ಬರು, "ಬನ್ನಿ, ಯೆಹೋವನು ಹೇಳುವುದನ್ನು ನಾವು
ಹೋಗಿ ಕೇಳೋಣ" 31ಎಂದು ಹೇಳುತ್ತಾ ನಿನ್ನ ಬಳಿಗೆ
ನನ್ನ ಜನರಂತೆ ಬರುವರು. ನನ್ನ ಜನರಂತೆ ನಿನ್ನ ಎದುರಿ
ನಲ್ಲಿ ಬಂದು ಕುಳಿತುಕೊಳ್ಳುವರು. ನಿನ್ನ ಮಾತುಗಳನ್ನು
ಅವರು ಕೇಳಿದರೂ ಅವುಗಳಿಗೆ ಅವಿಧೇಯರಾಗದೆ
ತಮಗೆ ಇಷ್ಟಪಡುವದನ್ನೇ ಮಾಡುವರು. ಇತರರಿಗೆ
ಮೋಸ ಮಾಡಿ ಹಣಗಳಿಸುವದೇ ಅವರ ಕೆಲಸ. 32ನೀನು
ಅವರಿಗೆ ಯಾರೂ ಅಲ್ಲ. ಒಬ್ಬ ಪ್ರೇಮಗೀತೆಯನ್ನು
ಹಾಡುವ ಹಾಡುಗಾರ. ನಿನಗೆ ಮಧುರವಾದ ಕಂಠವಿದೆ.
ನೀನು ವಾದ್ಯವನ್ನು ಚೆನ್ನಾಗಿ ಬಾರಿಸುವಿ. ಅವರು ನಿನ್ನ
ಮಾತುಗಳನ್ನು ಕೇಳಿದರೂ ನೀನು ಹೇಳಿದಂತೆ
ಮಾಡುವದಿಲ್ಲ. 33ಆದರೆ ನೀನು ಹಾಡುವ ವಿಷಯಗಳು
ಸಂಭವಿಸುವವು. ಆಗ ಜನರು, 'ನಿಜವಾಗಿಯೂ ನಮ್ಮ
ಮಧ್ಯೆ ಒಬ್ಬ ಪ್ರವಾದಿಯು ವಾಸಿಸಿದನಲ್ಲಾ?' ಎಂದು
ಅನ್ನುವರು.'''

## ಇಸ್ರೇಲ್ ಒಂದು ಕುರಿಮಂದೆಯ ತರಹ

34 ಯೆಹೋವನ ಸಂದೇಶ ನನಗೆ ಬಂತು. ಆತನು
ಹೇಳಿದ್ದೇನೆಂದರೆ, 2"ನರಪುತ್ರನೇ, ನೀನು
ಇಸ್ರೇಲರ ಕುರುಬರ ಸಂಗಡ ನನ್ನ ಪರವಾಗಿ ಮಾತ
ನಾಡು. ಒಡೆಯನಾದ ಯೆಹೋವನು ಇಂತೆನ್ನುತ್ತಾನೆ
ಎಂದು ಅವರಿಗೆ ಹೇಳು, 'ಇಸ್ರೇಲರ ಕುರುಬರೇ, ನೀವು
ನೀವಾಗಿಯೇ ಹೊಟ್ಟೆ ತುಂಬಿಸಿಕೊಳ್ಳುತ್ತೀರಿ. ಇದು
ಸರಿಯಲ್ಲ. ನಿಮ್ಮ ಮಂದೆಗೆ ನೀವು ಆಹಾರ ಯಾಕೆ
ಒದಗಿಸುವದಿಲ್ಲ? 3ನೀವು ಕೊಬ್ಬಿದ ಕುರಿಯ ಮಾಂಸ
ವನ್ನು ತಿನ್ನುತ್ತೀರಿ; ಅದರ ಉಣ್ಣೆಯಿಂದ ಬಟ್ಟೆಯನ್ನು
ತಯಾರಿಸುತ್ತೀರಿ. ಕೊಬ್ಬಿದ ಕುರಿಗಳನ್ನು ಕಡಿಯುತ್ತೀರಿ;
ಆದರೆ ಕುರಿಗಳನ್ನು ಮೇಯಿಸುವುದಿಲ್ಲ. 4ಆದರೆ ನೀವು
ಬಲಹೀನ ಕುರಿಗಳನ್ನು ಬಲಪಡಿಸಲಿಲ್ಲ. ಕಾಯಿಲೆಯ
ಲ್ಲಿರುವ ಕುರಿಗಳನ್ನು ನೀವು ಪರಾಮರಿಸಲಿಲ್ಲ. ಗಾಯ
ಗೊಂಡ ಕುರಿಗಳಿಗೆ ಬಟ್ಟೆ ಸುತ್ತಲಿಲ್ಲ. ಕೆಲವು ಕುರಿಗಳು
ದಾರಿತಪ್ಪಿ ದೂರ ಹೋದವು. ಆದರೆ ನೀವು ಅದರ ಬೆನ್ನ
ಹಿಂದೆ ಹೋಗಿ ಹಿಂತಿರುಗಿ ಬರುವಂತೆ ಮಾಡಲಿಲ್ಲ. ತಪ್ಪಿ
ಹೋದ ಕುರಿಗಳನ್ನು ನೀವು ಹುಡುಕಲಿಲ್ಲ. ನೀವು ಬಹಳ
ಕ್ರೂರಿಗಳೂ ದಯೆ ಇಲ್ಲದವರೂ ಆಗಿದ್ದೀರಿ. ಆ
ರೀತಿಯಾಗಿ ನೀವು ನಿಮ್ಮ ಕುರಿಗಳನ್ನು ನಡೆಸಿದಿರಿ.

5"'ಈಗ ಆ ಮಂದೆಯು ಚದರಿ ಹೋಗಿದೆ.
ಯಾಕೆಂದರೆ ಅವಕ್ಕೆ ಕುರುಬರಿಲ್ಲ. ಅವುಗಳು ಕಾಡು
ಪ್ರಾಣಿಗಳಿಗೆ ಆಹಾರವಾದವು. ಆದುದರಿಂದ ಅವು
ಚದರಿಹೋದವು. 6ಕುರುಬರೇ ಇಲ್ಲವಾದ್ದರಿಂದ ಎತ್ತರ
ವಾದ ಎಲ್ಲಾ ಬೆಟ್ಟಗುಡ್ಡಗಳ ಮೇಲೆ ನನ್ನ ಮಂದೆಯು
ಅಲೆದಾಡಿತು; ಭೂಮುಖದ ಎಲ್ಲಾ ಕಡೆಗಳಲ್ಲಿ ಚದರಿ
ಹೋಯಿತು.''' 7ಆದುದರಿಂದ ಕುರಬರೇ, ಯೆಹೋ
ವನ ಮಾತುಗಳನ್ನು ಕೇಳಿರಿ. ನನ್ನ ಒಡೆಯನಾದ ಯೆಹೋ
ವನು ಹೇಳುವದೇನೆಂದರೆ, 8"ನನ್ನ ಜೀವದಾಣೆ, ನನ್ನ
ಕುರಿಗಳು ಎಲ್ಲಾ ಬಗೆಯ ಕಾಡುಪ್ರಾಣಿಗಳಿಂದ ಹಿಡಿಯ
ಲ್ಪಟ್ಟು ಅವುಗಳಿಗೆ ಆಹಾರವಾದವು. ಯಾಕೆಂದರೆ ಅವು
ಗಳಿಗೆ ಒಳ್ಳೆಯ ಕುರುಬರಿರಲಿಲ್ಲ. ನನ್ನ ಕುರುಬರು ತಮ್ಮ
ಕುರಿಗಳಿಗೆ ಗಮನಕೊಡಲಿಲ್ಲ. ಅವರು ಅವುಗಳನ್ನು
ಕೊಂದು ತಿಂದರು. ಆದರೆ ಮಂದೆಗೆ ಆಹಾರ
ಒದಗಿಸಲಿಲ್ಲ."

9ಆದುದರಿಂದ ಕುರುಬರೇ, ಯೆಹೋವನ ಮಾತನ್ನು
ಕೇಳಿರಿ. 10ಯೆಹೋವನು ಹೇಳುವುದೇನೆಂದರೆ, "ನಾನು
ಆ ಕುರುಬರಿಗೆ ವಿರುದ್ಧವಾಗಿದ್ದೇನೆ. ಅವರ ಕೈಯಿಂದ
ನನ್ನ ಕುರಿಗಳ ಬಗ್ಗೆ ವಿಚಾರಿಸುವೆನು. ನಾನು ಅವರನ್ನು
ತೊಲಗಿಸಿ ಬಿಡುವೆನು. ಅವರು ಇನ್ನು ಮುಂದೆ ನನ್ನ
ಕುರುಬರು ಆಗರು. ಇನ್ನು ಅವರಿಗೆ ತಮ್ಮ ಹೊಟ್ಟೆ ಹೊರ
ಕೊಳ್ಳಲು ಸಾಧ್ಯವಿಲ್ಲ. ನನ್ನ ಕುರಿಗಳನ್ನು ಅವರ

ಬಾಯಿಂದ ತಪ್ಪಿಸು ವೆನು. ಆಗ ನನ್ನ ಕುರಿಗಳು ಅವರಿಗೆ
ಆಹಾರವಾಗುವುದಿಲ್ಲ.
11ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ,
‘‘ನಾನೇ ಅವರಿಗೆ ಕುರುಬನಾಗಿರುವೆನು. ತಪ್ಪಿಹೋದ
ಕುರಿಗಳನ್ನು ನಾನು ಹುಡುಕುವೆನು, ನಾನು ಅವರನ್ನು
ಗಮನಿಸುತ್ತಾ ನಡೆಸುವೆನು. 12ತಪ್ಪಿಹೋದ ಕುರಿಗಳಿಗಾಗಿ
ಹುಡುಕುವ ಕುರುಬನಂತೆ ನನ್ನ ಕುರಿಗಳನ್ನು ಹುಡುಕಿ
ರಕ್ಷಿಸುವೆನು. ಮೋಡ ಕವಿದ ಕಾರ್ಗತ್ತಲೆಯ ದಿನದಲ್ಲಿ
ತಪ್ಪಿಸಿಕೊಂಡ ಅವುಗಳನ್ನು ಹುಡುಕಿ ತರುವೆನು. 13ನನ್ನ
ಕುರಿಗಳನ್ನು ಆ ದೇಶಗಳಿಂದ ಬರಮಾಡುವೆನು. ಆ
ದೇಶಗಳಿಂದ ಅವುಗಳನ್ನು ಒಟ್ಟುಗೂಡಿಸುವೆನು. ಅವರ
ಸ್ವಂತ ದೇಶಕ್ಕೆ ಹಿಂದಿರುಗಿಸುವೆನು. ಇಸ್ರೇಲರ ಪರ್ವತ
ಗಳಲ್ಲಿ ಅವುಗಳನ್ನು ಮೇಯಿಸುವೆನು. ನೀರಿನ ತೊರೆಗಳ
ಬದಿಯಲ್ಲಿ ಜನರಿರುವ ಸ್ಥಳಗಳಲ್ಲಿ ನಾನವರನ್ನು ಮೇಯಿ
ಸುವೆನು. 14ಹುಲ್ಲುಗಾವಲಿಗೆ ನಾನು ಅವರನ್ನು ನಡೆಸು
ವೆನು. ಇಸ್ರೇಲಿನ ಉನ್ನತ ಬೆಟ್ಟಗಳಲ್ಲಿ ಅವು ಮೇಯು
ವವು. ಅಲ್ಲಿ ಒಳ್ಳೇ ಸ್ಥಳದಲ್ಲಿ ಅವುಗಳು ಮಲಗಿ ಹುಲ್ಲನ್ನು
ಮೇಯುವವು. 15ಹೌದು, ನಾನು ನನ್ನ ಮಂದೆಯನ್ನು
ಮೇಯಿಸಿ ಅವುಗಳನ್ನು ವಿಶ್ರಾಂತಿಯ ಸ್ಥಳಕ್ಕೆ ನಡೆಸು
ವೆನು.‘‘ ಇದು ನನ್ನ ಒಡೆಯನಾದ ಯೆಹೋವನ ನುಡಿ.
16‘‘ಕಳೆದುಹೋದ ಕುರಿಗಳನ್ನು ನಾನು ಹುಡುಕು
ವೆನು. ಚದರಿ ಹೋಗಿದ್ದ ಕುರಿಗಳನ್ನು ಹಿಂದಕ್ಕೆ ತರುವೆನು.
ಗಾಯಗೊಂಡ ಕುರಿಗಳನ್ನು ಬಟ್ಟೆಯಿಂದ ಸುತ್ತುವೆನು.
ಬಲಹೀನ ಕುರಿಗಳನ್ನು ಬಲಶಾಲಿಯಾಗಿ ಮಾಡುವೆನು.
ಆದರೆ ನಾನು ಕೊಬ್ಬಿದ, ಶಕ್ತಿಶಾಲಿಯಾದ ಕುರುಬರನ್ನು
ನಾಶಮಾಡುವೆನು. ಯೋಗ್ಯವಾದ ಶಿಕ್ಷೆಯನ್ನು ಅವರಿಗೆ
ಉಣಿಸುವೆನು.’’
17ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘‘ನನ್ನ ಮಂದೆಯೇ, ನಾನು ಒಂದೊಂದು ಕುರಿಗಳ
ನ್ಯಾಯ ತೀರಿಸುತ್ತೇನೆ. ಟಗರುಗಳನ್ನೂ ಹೋತಗಳನ್ನೂ
ನ್ಯಾಯವಿಚಾರಣೆ ಮಾಡುವೆನು. 18ನೀವು ಒಳ್ಳೇ
ದೇಶದಲ್ಲಿ ಬೆಳೆಯುವ ಹುಲ್ಲನ್ನು ಮೇಯಬಹುದು.
ಆದುದರಿಂದ ಬೇರೆ ಕುರಿಗಳು ಮೇಯಬೇಕಾದ
ಹುಲ್ಲನ್ನು ನೀವು ಯಾಕೆ ತುಳಿದು ಹಾಳುಮಾಡುವಿರಿ?
ನೀವು ಶುದ್ಧವಾದ ನೀರು ಬೇಕಾದಷ್ಟು ಕುಡಿಯ
ಬಹುದು. ಆದರೆ ಬೇರೆ ಕುರಿಗಳು ನೀರು ಕುಡಿಯದಂತೆ
ಯಾಕೆ ನೀರನ್ನು ಕದಡಿಸುತ್ತೀರಿ. 19ನೀವು ತುಳಿದು ಹಾಳು
ಮಾಡಿದ ಹುಲ್ಲನ್ನು ನನ್ನ ಕುರಿಗಳು ಮೇಯಬೇಕು. ನೀವು
ಕಾಲಿನಿಂದ ಕೆದಕಿ ಕೆಸರು ಮಾಡಿದ ನೀರನ್ನು ನನ್ನ
ಕುರಿಗಳು ಕುಡಿಯಬೇಕು.’’
20ಆದುದರಿಂದ ನನ್ನ ಒಡೆಯನಾದ ಯೆಹೋವನು
ಹೇಳುವದೇನೆಂದರೆ, ‘‘ನಾನು ಕೊಬ್ಬಿದ ಕುರಿಗಳಿಗೂ
ಬಲಹೀನ ಕುರಿಗಳಿಗೂ ನ್ಯಾಯತೀರಿಸುವೆನು. 21ನೀನು
ನಿನ್ನ ಶಕ್ತಿಯಿಂದ ಬೇರೆ ಕುರಿಗಳನ್ನು ದೂಡಿಬಿಡುತ್ತೀ.
ನಿನ್ನ ಕೊಂಬುಗಳಿಂದ ಬಲಹೀನ ಕುರಿಗಳನ್ನು ಹಾದು
ಬಿಡುತ್ತೀ. ಅವುಗಳು ಆ ಸ್ಥಳದಿಂದ ಓಡಿಬಿಡುವಂತೆ
ಮಾಡುತ್ತೀ. 22ಆದುದರಿಂದ ನಾನು ನನ್ನ ಕುರಿಗಳನ್ನು
ರಕ್ಷಿಸುವೆನು. ಅವುಗಳನ್ನು ಕಾಡುಪ್ರಾಣಿಗಳು ಇನ್ನು
ಮುಂದೆ ಹಿಡಿಯಲಿಕ್ಕಿಲ್ಲ. ಅವುಗಳಲ್ಲಿ ಪ್ರತಿಯೊಂದಕ್ಕೂ
ನಾನು ನ್ಯಾಯತೀರಿಸುವೆನು. 23ಆಮೇಲೆ ನಾನು ಅವರ
ಮೇಲೆ ಒಬ್ಬ ಕುರುಬನನ್ನು ಇಡುವೆನು. ಅವನು ನನ್ನ
ಸೇವಕನಾದ ದಾವೀದನು; ಅವನು ಅವರನ್ನು
ಮೇಯಿಸುವನು ಮತ್ತು ಅವರಿಗೆ ಕುರುಬನಾಗುವನು.
24ಯೊಹೋವನಾದ ನಾನು ಅವರಿಗೆ ದೇವರಾಗಿರು
ವೆನು. ನನ್ನ ಸೇವಕನಾದ ದಾವೀದನು ಅವರೊಂದಿಗೆ
ವಾಸಿಸುತ್ತಾ ಅವರನ್ನು ಆಳುವನು. ಇದು ಯೆಹೋವ
ನಾದ ನನ್ನ ನುಡಿ.
25‘‘ನಾನು ನನ್ನ ಕುರಿಗಳೊಂದಿಗೆ ಸಮಾಧಾನದ
ಒಡಂಬಡಿಕೆಯನ್ನು ಮಾಡುವೆನು. ಕೆಟ್ಟ ಕುರಿಗಳನ್ನು
ನಾನು ದೇಶದೊಳಗಿಂದ ತೆಗೆದುಬಿಡುವೆನು. ಆ ಮೇಲೆ
ನನ್ನ ಕುರಿಗಳು ಅಡವಿಯಲ್ಲಿ ಸುರಕ್ಷಿತವಾಗಿದ್ದು ಕಾಡು
ಗಳಲ್ಲಿ ಮಲಗಿಕೊಳ್ಳುವವು. 26ನಾನು ನನ್ನ ಕುರಿಗಳನ್ನೂ
ನನ್ನ ಬೆಟ್ಟದ ಸುತ್ತಲೂ ಇರುವ ಸ್ಥಳಗಳನ್ನೂ ಆಶೀರ್ವದಿ
ಸುವೆನು. ಸರಿಯಾದ ಸಮಯಕ್ಕೆ ಮಳೆ ಬೀಳುವಂತೆ
ಮಾಡುವೆನು. ಅದು ಆಶೀರ್ವಾದದ ಸುರಿಮಳೆಗೈವದು.
27ಹೊಲದಲ್ಲಿ ಬೆಳೆಯುವ ಮರಗಳು ಫಲವನ್ನೀಯು
ವವು. ಭೂಮಿಯು ಬೆಳೆಯನ್ನು ಕೊಡುವದು. ಆಗ ಕುರಿ
ಗಳು ಅವರ ದೇಶದಲ್ಲಿ ಸುರಕ್ಷಿತವಾಗಿರುವವು. ಅವುಗಳ
ಮೇಲಿರುವ ನೊಗಗಳನ್ನು ನಾನು ಮುರಿದುಬಿಡುವೆನು.
ಅವರನ್ನು ಗುಲಾಮರನ್ನಾಗಿ ಮಾಡಿದ ದೇಶದವರ ಶಕ್ತಿ
ಯನ್ನೇ ಮುರಿಯುವೆನು. ನಾನು ಯೆಹೋವನೆಂದು ಆಗ
ಅವರಿಗೆ ತಿಳಿಯುವದು. 28ಬೇರೆ ದೇಶಗಳು ಅವರನ್ನು
ಪ್ರಾಣಿಗಳನ್ನು ಹಿಡಿಯುವಂತೆ ಇನ್ನು ಹಿಡಿಯುವದಿಲ್ಲ.
ಅವರು ಅವುಗಳನ್ನು ಇನ್ನು ಮುಂದಕ್ಕೆ ತಿನ್ನುವದಿಲ್ಲ.
ಅವರು ಸುರಕ್ಷಿತವಾಗಿ ಜೀವಿಸುವರು. ಯಾರೂ
ಅವರನ್ನು ಇನ್ನು ಹೆದರಿಸುವುದಿಲ್ಲ. 29ನಾನು ಅವರಿಗೆ
ಭೂಮಿಯನ್ನು ಕೊಡುವೆನು. ಅದರಲ್ಲಿ ಅವರು ತೋಟ
ವನ್ನು ಮಾಡುವರು. ಆ ನಾಡಿನಲ್ಲಿ ಅವರು ಇನ್ನೆಂದಿಗೂ
ಹಸಿವೆಯಿಂದ ಸಂಕಟಪಡುವುದಿಲ್ಲ. ಇತರ ಜನಾಂಗ
ದವರಿಂದ ಇನ್ನು ಮುಂದೆ ಅವಮಾನ ಹೊಂದುವುದಿಲ್ಲ.
30ಆಗ ನಾನು ಅವರ ದೇವರೆಂದೂ ನಾನು ಅವರೊಂದಿಗೆ
ಇದ್ದೇನೆ ಎಂದೂ ಅವರು ತಿಳಿದುಕೊಳ್ಳುವರು. ಮತ್ತು
ಇಸ್ರೇಲ್ ಜನಾಂಗವು ಸಹ ತಾವು ನನ್ನ ಜನರು ಎಂದು
ತಿಳಿದುಕೊಳ್ಳುವರು.’’ ಇದು ಒಡೆಯನಾದ ಯೆಹೋವನ

ನುಡಿ. 31ನೀವು ನನ್ನ ಕುರಿಗಳು, ಹಸರುಗಾವಲಿನ
ಕುರಿಗಳು. ನೀವು ಮಾನವ ರಷ್ಟೇ. ನಾನು ನಿಮ್ಮ ದೇವರು.
ಇವು ನನ್ನ ಒಡೆಯನಾದ ಯೆಹೋವನ ನುಡಿಗಳು.

## ಎದೋಮ್ ವಿರುದ್ಧವಾದ ಸಂದೇಶ

35 ಯೆಹೋವನ ಸಂದೇಶ ನನಗೆ ಬಂತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ,
ಸೇಯೀರ್ ಪರ್ವತಗಳ ಕಡೆಗೆ ನೋಡು. ನನ್ನ ಪರವಾಗಿ
ಅದಕ್ಕೆ ವಿರುದ್ಧವಾಗಿ ಮಾತನಾಡು. 3‘ನನ್ನ ಒಡೆಯನಾದ
ಯೆಹೋವನು ಹೀಗೆ ಹೇಳುತ್ತಾನೆಂದು ಅವರಿಗೆ ಹೇಳು:

‘‘‘ಸೇಯಿರ್ ಪರ್ವತವೇ, ನಾನು ನಿನಗೆ ವಿರುದ್ಧ
ವಾಗಿದ್ದೇನೆ. ನಿನ್ನನ್ನು ಶಿಕ್ಷಿಸುತ್ತೇನೆ. ನಾನು ನಿನ್ನನ್ನು
ಬಂಜರು ಭೂಮಿಯನ್ನಾಗಿ ಮಾಡುವೆನು.
4 ನಾನು ನಿನ್ನ ಪಟ್ಟಣಗಳನ್ನೆಲ್ಲಾ ನಾಶಮಾಡುವೆನು;
ನೀನು ಬರಿದಾಗುವಿ. ನಾನು ಒಡೆಯನಾದ
ಯೆಹೋವನೆಂದು ಆಗ ನೀನು ತಿಳಿಯುವಿ.
5 ಯಾಕೆಂದರೆ ನೀನು ಯಾವಾಗಲೂ ನನ್ನ ಜನಕ್ಕೆ
ವಿರೋಧವಾಗಿದ್ದೀ. ಇಸ್ರೇಲರ ವಿರುದ್ಧವಾಗಿ ಕತ್ತಿ
ಯನ್ನೆತ್ತಿದ್ದೀ. ಅವರು ಆಗ ಸಂಕಟದಲ್ಲಿದ್ದರು
ಮತ್ತು ತಮ್ಮ ಶಿಕ್ಷಾ ಸಮಯದ ಕಡೆಗಾಲ
ದಲ್ಲಿದ್ದರು.’’’

6ಆದುದರಿಂದ ನನ್ನ ಒಡೆಯನಾದ ಯೆಹೋವನು
ಹೇಳುವದೇನೆಂದರೆ, ‘‘ನನ್ನ ಜೀವದಾಣೆ, ನಿಮ್ಮನ್ನು
ಮರಣವು ನುಂಗಿ ಬಿಡುವಂತೆ ಮಾಡುವೆನು. ಮರಣವು
ನಿಮ್ಮನ್ನು ಹಿಂಬಾಲಿಸುವದು. ನೀನು ಜನರನ್ನು ಕೊಲ್ಲಲು
ಹಿಂಜರಿಯಲಿಲ್ಲ. ಆದುದರಿಂದ ಮರಣವು ನಿನ್ನನ್ನು
ಓಡಿಸುವದು. 7ನಾನು ಸೇಯೀರ್ ಬೆಟ್ಟವನ್ನು ಹಾಳು
ಗೆಡಹುವೆನು. ಆ ನಗರದಿಂದ ಬರುವ ಪ್ರತಿಯೊಬ್ಬನನ್ನು
ಸಾಯಿಸುವೆನು. ಮತ್ತು ಆ ನಗರದೊಳಗೆ ಪ್ರವೇಶಿಸುವ
ಪ್ರತಿಯೊಬ್ಬನನ್ನು ಸಾಯಿಸುವೆನು. 8ಅದರ ಬೆಟ್ಟ
ಪ್ರಾಂತ್ಯಗಳನ್ನು ಸತ್ತ ಹೆಣಗಳಿಂದ ಮುಚ್ಚುವೆನು. ಹೆಣ
ಗಳು ಎಲ್ಲಾ ಕಡೆಗಳಲ್ಲಿಯೂ ಬೆಟ್ಟಗುಡ್ಡ ತಗ್ಗುಗ
ಳಲ್ಲಿಯೂ ಇರುವವು.’’
9‘‘ನೀನು ನಿತ್ಯಕಾಲಕ್ಕೂ ಬರಿದಾಗಿರುವಿ. ಯಾರೂ
ನಿನ್ನ ಪಟ್ಟಣಗಳಲ್ಲಿ ವಾಸಿಸರು. ಆಗ ನೀನು ದೇವರಾದ
ಯೆಹೋವನು ನಾನೇ ಎಂದು ತಿಳಿಯುವಿ.’’
10‘‘ಇವು ಎರಡು ದೇಶಗಳು (ಇಸ್ರೇಲ್ ಮತ್ತು
ಯೆಹೂದ) ನನ್ನವು. ಅವುಗಳನ್ನು ಸ್ವಂತಕ್ಕಾಗಿ ತೆಗೆದು
ಕೊಳ್ಳೋಣ’’ ಎಂದು ಹೇಳಿರುತ್ತೀ.

ಆದಾಗ್ಯೂ ಯೆಹೋವನು ಅಲ್ಲಿದ್ದನು. 11ನನ್ನ ಒಡೆಯ
ನಾದ ಯೆಹೋವನು ಇಂತೆನ್ನುತ್ತಾನೆ: ‘‘ನನ್ನ ಜನರ
ಮೇಲೆ ನೀನು ಅಸೂಯೆಪಟ್ಟೆ. ಮತ್ತು ನೀನು ಅವರ
ಮೇಲೆ ಸಿಟ್ಟುಗೊಂಡಿದ್ದೆ. ನಿಜವಾಗಿ ಹೇಳಬೇಕಾದರೆ,
ನೀನು ಅವರನ್ನು ದ್ವೇಷಿಸಿದೆ. ಆದುದರಿಂದ, ನನ್ನ ಜೀವ
ದಾಣೆ, ನೀನು ಹೇಗೆ ಅವರನ್ನು ನೋಯಿಸಿದೆಯೋ
ಹಾಗೆಯೇ ನಾನು ನಿನ್ನನ್ನು ಶಿಕ್ಷಿಸುವೆನು. ಈ ರೀತಿಯಲ್ಲಿ,
ನನ್ನ ಜನರೊಂದಿಗೆ ನಾನಿದ್ದೇನೆಂದು ಅವರಿಗೆ ತಿಳಿಯ
ಪಡಿಸುವೆನು. 12ಆಗ ನಿನ್ನ ಎಲ್ಲಾ ತುಚ್ಛಮಾತುಗಳನ್ನು
ನಾನು ಕೇಳಿರುತ್ತೇನೆ ಎಂದು ನೀನು ತಿಳಿದುಕೊಳ್ಳುವಿ.
ಇಸ್ರೇಲ್ ಪರ್ವತದ ವಿರುದ್ಧವಾಗಿ ನೀನು ಆಡಿದ
ಉದ್ರೇಕಕಾರಿಯಾದ ಸಂಗತಿಗಳನ್ನೆಲ್ಲ ನಾನು ಕೇಳಿ
ದ್ದೇನೆ. ‘ಇಸ್ರೇಲ್ ನಾಶವಾಯಿತು. ಈಗ ಅದನ್ನು ಲೂಟಿ
ಮಾಡೋಣ’ಎಂದು ನೀನು ಹೇಳಿದಿ. 13ನಿನ್ನ ಹೆಮ್ಮೆ
ಯಿಂದ ನನ್ನ ವಿರುದ್ಧವಾಗಿ ಮಾತನಾಡಿದ್ದೀ, ನೀನು
ಅನೇಕ ಬಾರಿ ಹೇಳಿರುತ್ತೀ. ನಾನೆಲ್ಲವನ್ನು ಕೇಳಿದ್ದೇನೆ.’’
14ನನ್ನ ಒಡೆಯನಾದ ಯೆಹೋವನ ನುಡಿ ಇದು:
‘‘ಪ್ರಪಂಚದ ಎಲ್ಲಾ ದೇಶಗಳು ನಾನು ನಿನ್ನನ್ನು ನಾಶ
ಮಾಡುವಾಗ ಸಂತೋಷಿಸುವವು. 15ಇಸ್ರೇಲ್ ರಾಜ್ಯವು
ನಾಶವಾದಾಗ ನೀನು ಸಂತೋಷ ಪಟ್ಟಿರುವಿ. ನಾನು
ಕೂಡ ಹಾಗೆಯೇ ಮಾಡುವೆನು. ಸೇಯೀರ್ ಪರ್ವತ
ಮತ್ತು ಎದೋಮ್ ರಾಜ್ಯವೆಲ್ಲಾ ನಾಶವಾಗುವದು. ಆಗ
ನಾನು ಯೆಹೋವನೆಂದು ನೀನು ತಿಳಿಯುವಿ.’’

## ಇಸ್ರೇಲ್ ರಾಜ್ಯವು ತಿರುಗಿ ಸ್ಥಾಪಿಸಲ್ಪಡುವದು

36 ‘‘ನರಪುತ್ರನೇ, ನನ್ನ ಪರವಾಗಿ ಇಸ್ರೇಲಿನ
ಪರ್ವತದೊಂದಿಗೆ ಮಾತನಾಡು. ಅವುಗಳಿಗೆ
ಯೆಹೋವನ ಮಾತುಗಳನ್ನು ಕೇಳಲು ಹೇಳು. 2ಒಡೆಯ
ನಾದ ಯೆಹೋವನು ಇಂತೆನ್ನುತ್ತಾನೆ ಎಂದು ಅವುಗಳಿಗೆ
ಹೇಳು. ‘ವೈರಿಗಳು ನಿನಗೆ ವಿರುದ್ಧವಾಗಿ ಕೆಟ್ಟಮಾತುಗಳ
ನ್ನಾಡಿದ್ದಾರೆ. ಒಳ್ಳೆಯದಾಯಿತು. ಈಗ ಪುರಾತನ ಪರ್ವತ
ಗಳು ನಮ್ಮದಾದವು ಎಂದು ಹೇಳುತ್ತಾರೆ.’
3‘‘ಆದುದರಿಂದ ಹೋಗಿ ಆ ಪರ್ವತಗಳಿಗೆ ನನ್ನ ಪರ
ವಾಗಿ ಹೇಳು. ಇದು ಒಡೆಯನಾದ ಯೆಹೋವನ ನುಡಿ
ಎಂದು ಹೇಳು. ‘ವೈರಿಗಳು ನಿನ್ನ ಪಟ್ಟಣಗಳನ್ನೆಲ್ಲಾ ನಾಶ
ಮಾಡಿ ಎಲ್ಲಾ ದಿಕ್ಕುಗಳಿಂದ ನುಗ್ಗಿ ನಿನ್ನ ಮೇಲೆ ಧಾಳಿ
ಮಾಡಿರುತ್ತಾರೆ. ನೀನು ಬೇರೆಯವರ ವಶವಾಗಬೇಕೆಂಬ
ದಾಗಿ ಹೀಗೆ ಮಾಡಿದರು. ಜನರು ನಿನ್ನ ವಿಷಯವಾಗಿ
ಗುಜುಗುಜು ಮಾತನಾಡಿದರು.’’’
4ಆದುದರಿಂದ ಇಸ್ರೇಲಿನ ಪರ್ವತಗಳೇ, ನನ್ನ ಒಡೆಯ
ನಾದ ಯೆಹೋವನ ಮಾತುಗಳಿಗೆ ಕಿವಿಗೊಡಿರಿ! ನನ್ನ
ಒಡೆಯನಾದ ಯೆಹೋವನು ಬೆಟ್ಟಗಳಿಗೂ

ಗುಡ್ಡಗಳಿಗೂ ತೊರೆಗಳಿಗೂ, ಕಣಿವೆಗಳಿಗೂ, ಪಾಳುಬಿದ್ದ
ಸ್ಥಳಗಳಿಗೂ ಮತ್ತು ಅನ್ಯಜನರಿಂದ ಕೊಳ್ಳೆಹೊಡೆ
ಯಲ್ಪಟ್ಟು ಅಪಹಾಸ್ಯಕ್ಕೆ ಒಳಗಾಗಿ ನಿರ್ಜನವಾಗಿರುವ
ಪಟ್ಟಣಗಳಿಗೂ ಇಂತೆನ್ನುತ್ತಾನೆ: 5ಎದೋಮಿನ
ಬಗ್ಗೆಯೂ ಉಳಿದ ಆ ವಿದೇಶಗಳ ಬಗ್ಗೆಯೂ ನಾನು
ರೋಷದಿಂದ ಮಾತಾಡುತ್ತಿದ್ದೇನೆಂದು ಪ್ರಮಾಣ
ಮಾಡುತ್ತೇನೆ. ಆ ಜನಾಂಗಗಳು ನನ್ನ ದೇಶವನ್ನು ತಮ್ಮ
ಸ್ವಾಸ್ಥ್ಯವನ್ನಾಗಿ ಸಂತೋಷದಿಂದ ತೆಗೆದುಕೊಂಡರು.
ಅವರು ಅದನ್ನು ವಶಪಡಿಸಿಕೊಂಡು ಸೂರೆ ಮಾಡಿದಾಗ
ಮತ್ತು ನನ್ನ ಜನರಿಗೆ ಅವಮಾನ ಮಾಡಿದಾಗ ನನ್ನ
ಜನರನ್ನು ಅವರು ಎಷ್ಟೊಂದು ದ್ವೇಷಿಸುತ್ತಾರೆಂದು
ತೋರಿಸುತ್ತಾ ಉಲ್ಲಾಸಪಟ್ಟರು. 6ಇಸ್ರೇಲ್ ದೇಶದ
ವಿಷಯವಾಗಿ ಅವರಿಗೆ ಹೇಳು. ಪರ್ವತ, ಬೆಟ್ಟ, ತಗ್ಗು,
ಹೊಳೆಗಳಿಗೆ ಹೇಳು. ಒಡೆಯನಾದ ಯೆಹೋವನು
ಇಂತೆನ್ನುತ್ತಾನೆ ಎಂದು ತಿಳಿಸು. 'ನೀನು ಆ ದೇಶಗಳವರ
ಅವಹೇಳನದ ಮಾತುಗಳನ್ನು ಕೇಳಬೇಕಾಯಿತಲ್ಲಾ
ಎಂದು ನನ್ನ ಹೃದಯವು ಸಿಟ್ಟಿನಲ್ಲಿ ಕುದಿಯುತ್ತದೆ.'''
7ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
''ನಿನ್ನ ಸುತ್ತಲೂ ಇರುವ ದೇಶಗಳು ನಿನ್ನ ವಿರುದ್ಧವಾಗಿ
ಅವಮಾನಕರವಾದ ಮಾತುಗಳನ್ನು ಆಡಿದ್ದರಿಂದ ಅವು
ಗಳನ್ನು ನಾನು ದಂಡಿಸುವುದಾಗಿ ಪರಲೋಕದ ಕಡೆಗೆ
ನನ್ನ ಕೈಯೆತ್ತಿ ಪ್ರಮಾಣ ಮಾಡುತ್ತೇನೆ.
8''ಆದರೆ ಇಸ್ರೇಲಿನ ಪರ್ವತಗಳೇ, ನೀವು ಹೊಸ
ಮರಗಳನ್ನು ಬೆಳೆಯಿಸಿ ನನ್ನ ಜನರಾದ ಇಸ್ರೇಲರಿಗೆ
ಹಣ್ಣುಗಳನ್ನು ಒದಗಿಸುತ್ತೀರಿ. 9ನಾನು ನಿನ್ನೊಂದಿಗಿದ್ದು
ಸಹಾಯಮಾಡುತ್ತೇನೆ. ಜನರು ನಿನ್ನ ನೆಲವನ್ನು
ಉಳುವರು; ಬೀಜವನ್ನು ಬಿತ್ತುವರು. 10ನಿನ್ನಲ್ಲಿ ಅನೇಕಾ
ನೇಕ ಮಂದಿ ವಾಸಿಸುವರು. ಇಡೀ ಇಸ್ರೇಲ್ ಜನಾಂಗ
ದವರು ಅಲ್ಲಿ ವಾಸಮಾಡುವರು. ಪಟ್ಟಣಗಳು ಜನಭರಿತ
ವಾಗುವವು. ಹಾಳಾದ ಸ್ಥಳಗಳೆಲ್ಲಾ ತಿರುಗಿ ಕಟ್ಟಲ್ಪಡು
ವವು. 11ನಾನು ನಿನಗೆ ಅನೇಕ ಜನರನ್ನೂ ಪ್ರಾಣಿಗಳನ್ನೂ
ಕೊಡುವೆನು. ಅವರು ವೃದ್ಧಿಯಾಗಿ ಹೆಚ್ಚು ಮಕ್ಕಳನ್ನು
ಪಡೆಯುವರು. ಹಿಂದಿನ ಕಾಲದಲ್ಲಿ ನಿನ್ನ ದೇಶ ಜನ
ಭರಿತವಾಗಿದ್ದಂತೆ ಈಗಲೂ ಆಗುವ ಹಾಗೆ ನಾನು
ಜನರನ್ನು ತರಿಸುವೆನು. ನಿನ್ನ ದೇಶವು ಹಿಂದೆ ಇದ್ದುದ
ಕ್ಕಿಂತಲೂ ಉತ್ತಮ ದೇಶವನ್ನಾಗಿ ಮಾಡುವೆನು. ಆಗ
ನಾನು ಯೆಹೋವನೆಂದು ನೀನು ತಿಳಿದುಕೊಳ್ಳುವಿ.
12ಹೌದು, ನಾನು ಅನೇಕಾನೇಕ ಇಸ್ರೇಲ್ ಜನರನ್ನು ನಿನ್ನ
ದೇಶಕ್ಕೆ ನಡೆಸುವೆನು. ನೀನು ಅವರ ಸೊತ್ತಾಗುವಿ. ಅವರ
ಮಕ್ಕಳನ್ನು ನೀನು ತೆಗೆದುಹಾಕುವದಿಲ್ಲ.''
13ನನ್ನ ಒಡೆಯನಾದ ಯೆಹೋವನು ಹೇಳಿದ ಮಾತು
ಗಳಿವು, ''ಇಸ್ರೇಲ್ ದೇಶವೇ, ಜನರು ನಿನ್ನ ವಿಷಯದಲ್ಲಿ
ಕೆಟ್ಟ ಮಾತುಗಳನ್ನು ಆಡುತ್ತಾರೆ. ನೀನು ನಿನ್ನ ಜನರನ್ನು
ನಾಶಮಾಡಿದಿ ಎಂದು ಹೇಳುತ್ತಾರೆ. ನಿನ್ನ ಮಕ್ಕಳನ್ನು
ನೀನೇ ತೆಗೆದು ಹಾಕಿದಿ ಎಂದು ಹೇಳುತ್ತಾರೆ. 14ಆದರೆ
ಇನ್ನು ಮುಂದೆ ನೀನು ಜನರನ್ನು ನಾಶಮಾಡುವದಿಲ್ಲ.
ಅವರ ಮಕ್ಕಳನ್ನು ನೀನು ತೆಗೆದುಬಿಡುವದಿಲ್ಲ.''ಇದು
ಒಡೆಯನಾದ ಯೆಹೋವನ ನುಡಿ. 15''ನಾನು ಆ
ಜನಾಂಗಗಳು ಇನ್ನು ಮೇಲೆ ನಿನ್ನನ್ನು ತುಚ್ಛೀಕರಿಸಲು
ಬಿಡುವದಿಲ್ಲ. ಅವರ ಮಾತುಗಳಿಂದ ಇನ್ನು ನೀನು ಬೇಸರ
ಪಟ್ಟುಕೊಳ್ಳಲಾರೆ. ನಿನ್ನ ಜನರಿಂದ ಮಕ್ಕಳನ್ನು ಕಿತ್ತುಕೊಳ್ಳ
ಲಾರೆ.'' ಇದು ನನ್ನ ಒಡೆಯನಾದ ಯೆಹೋವನ ನುಡಿ.

## ಯೆಹೋವನು ತನ್ನ ಪರಿಶುದ್ಧನಾಮವನ್ನು ಅಪಕೀರ್ತಿಗೆ ಒಳಪಡಿಸುವದಿಲ್ಲ

16ಯೆಹೋವನ ಸಂದೇಶ ನನಗೆ ಬಂದಿತು. ಆತನು
ಹೇಳಿದ್ದೇನೆಂದರೆ, 17''ನರಪುತ್ರನೇ, ಇಸ್ರೇಲ್
ಜನಾಂಗವು ತನ್ನ ಸ್ವದೇಶದಲ್ಲಿ ವಾಸಿಸಿತು. ಆದರೆ ಅವರು
ನಡೆಸಿದ ದುಷ್ಟತನದಿಂದ ದೇಶವನ್ನು ಮುಟ್ಟಾದ
ಸ್ತ್ರೀಯಂತೆ ಅಶುದ್ಧಗೊಳಿಸಿದರು. 18ಆ ದೇಶದಲ್ಲಿ ಜನ
ರನ್ನು ಕೊಲೆಮಾಡಿ ಅವರ ರಕ್ತವನ್ನು ನೆಲದ ಮೇಲೆ
ಸುರಿದರು. ತಮ್ಮ ವಿಗ್ರಹಗಳಿಂದ ದೇಶವನ್ನು ಹೊಲೆ
ಮಾಡಿದರು. ಆದುದರಿಂದ ನಾನು ಎಷ್ಟು ಸಿಟ್ಟುಗೊಂಡಿ
ದ್ದೇನೆ ಎಂಬುದನ್ನು ನಾನು ತೋರಿಸಿದೆನು. 19ದೇಶಾಂತ
ರಕ್ಕೆ ಅವರನ್ನು ಚದರಿಸಿ, ಎಲ್ಲಾ ದೇಶಗಳಲ್ಲಿ ಅವರನ್ನು
ಹರಡಿಸಿಬಿಟ್ಟೆನು. ಅವರು ಮಾಡಿದ ದುಷ್ಟತನಕ್ಕೆ ನಾನು
ಶಿಕ್ಷಿಸಿದೆನು. 20ಆ ದೇಶಗಳಲ್ಲಿರುವಾಗಲೂ ಅವರು ನನ್ನ
ಹೆಸರಿಗೆ ಅಪಕೀರ್ತಿ ತಂದರು. ಹೇಗೆ? 'ಇವರು
ಯೆಹೋವನ ಜನರು. ಆತನು ಕೊಟ್ಟ ದೇಶವನ್ನು ಇವರು
ತೊರೆದರು. ಆದುದರಿಂದ ಯೆಹೋವನಲ್ಲಿ ಏನೋ
ದೋಷವಿರಬೇಕು' ಎಂದು ಆ ದೇಶದ ಜನರು
ಅನ್ನುವಂತೆ ಮಾಡಿದರು.
21''ಇಸ್ರೇಲರು ತಾವು ಹೋದ ದೇಶಗಳಲ್ಲೆಲ್ಲಾ ನನ್ನ
ಹೆಸರಿಗೆ ಅವಮಾನ ಮಾಡಿದರು. 22ಆದುದರಿಂದ
ಇಸ್ರೇಲರಿಗೆ ಹೀಗೆ ಹೇಳು: ಇಸ್ರೇಲರೇ, ನೀವು ಹೋದ
ಕಡೆಗಳಲ್ಲೆಲ್ಲಾ ನನ್ನ ಹೆಸರಿಗೆ ಅವಮಾನ ಮಾಡಿದ್ದೀರಿ.
ಆದ್ದರಿಂದ ನನ್ನ ಹೆಸರನ್ನು ಕುರಿತಾಗಿ ದುಃಖಪಟ್ಟೆನು.
23ನನ್ನ ಹೆಸರು ಅತ್ಯಂತ ಪವಿತ್ರವಾದದ್ದು ಎಂದು ನಾನು
ಅವರಿಗೆ ತೋರಿಸುವೆನು. ನನ್ನ ಪವಿತ್ರ ನಾಮವನ್ನು ಆ
ದೇಶಗಳಲ್ಲಿ ಅವಮಾನಪಡಿಸಿದಿರಿ. ಆದರೆ ನಾನು ಪವಿತ್ರ
ನೆಂದು ನಿಮಗೆ ತೋರಿಸುತ್ತೇನೆ. ನನ್ನ ನಾಮವನ್ನು
ಗೌರವಿಸಲು ನಾನು ನಿಮಗೆ ಕಲಿಸುವೆನು. ಆಗ ಆ ದೇಶ
ದವರಿಗೆ ನಾನು ಯೆಹೋವನು ಎಂದು ಗೊತ್ತಾಗು
ವದು.'' ನನ್ನ ಒಡೆಯನಾದ ಯೆಹೋವನ ನುಡಿಗಳಿವು.

24ದೇವರು ಹೇಳಿದ್ದೇನೆಂದರೆ, ‘‘ನಾನು ಆ ದೇಶಗ
ಳಿಂದ ನಿಮ್ಮನ್ನು ತೆಗೆದು, ನಿಮ್ಮನ್ನು ಒಟ್ಟುಗೂಡಿಸಿ ನಿಮ್ಮ
ಸ್ವದೇಶಕ್ಕೆ ತಿರುಗಿ ಬರಮಾಡುವೆನು. 25ಆಗ ನಾನು ಶುದ್ಧ
ನೀರನ್ನು ನಿಮ್ಮ ಮೇಲೆ ಚಿಮುಕಿಸಿ ನಿಮ್ಮನ್ನು ಪರಿಶುದ್ಧರ
ನ್ನಾಗಿ ಮಾಡುವೆನು. ಆ ವಿಗ್ರಹಗಳ ಹೊಲಸನ್ನು ನಿಮ್ಮಿಂದ
ನಾನು ತೊಳೆದು ಹಾಕಿ ನಿಮ್ಮನ್ನು ಶುದ್ಧರನ್ನಾಗಿ
ಮಾಡುವೆನು.’’

26ದೇವರು ಹೇಳಿದ್ದೇನೆಂದರೆ, ‘‘ನಾನು ನಿಮ್ಮಲ್ಲಿ
ಒಂದು ಹೊಸ ಆತ್ಮವನ್ನಿಟ್ಟು ನಿಮ್ಮ ಯೋಚನೆಯ ರೀತಿ
ಯನ್ನು ಬದಲಾಯಿಸುವೆನು. ನಿಮ್ಮ ಕಲ್ಲಿನ ಹೃದಯವನ್ನು
ತೆಗೆದುಬಿಟ್ಟು ಮೃದುವಾದ ಮಾನವ ಹೃದಯವನ್ನು
ಕೊಡುವೆನು. 27ನಾನು ನನ್ನ ಆತ್ಮವನ್ನು ನಿಮ್ಮಲ್ಲಿರಿಸು
ವೆನು. ನೀವು ನನ್ನ ಆಜ್ಞೆಗಳಿಗೆ ವಿಧೇಯರಾಗುವಷ್ಟು ನಿಮ್ಮ
ಮನಸ್ಸನ್ನು ಬದಲಾಯಿಸುವೆನು. 28ಆಗ ನಾನು ನಿಮ್ಮ
ಪೂರ್ವಿಕರಿಗೆ ಕೊಟ್ಟ ದೇಶದಲ್ಲಿ ನೀವು ಬಾಳುವಿರಿ.
ನೀವು ನನ್ನ ಜನರಾಗುವಿರಿ. ನಾನು ನಿಮ್ಮ
ದೇವರಾಗಿರುವೆನು.’’

29ದೇವರು ಹೇಳಿದ್ದೇನೆಂದರೆ, ‘‘ಅದೇ ಸಮಯದಲ್ಲಿ
ನೀನು ಅಶುದ್ಧನಾಗದ ಹಾಗೇ ನಾನು ನೋಡಿಕೊಳ್ಳು
ವೆನು. ಬೀಜ ಬೆಳೆಯಲು ನಾನು ಆಜ್ಞಾಪಿಸುವೆನು. ನಿನಗೆ
ಹಸಿವೆಯಾಗಲು ಬಿಡುವದಿಲ್ಲ. 30ನಿಮ್ಮ ಮರಗಳಿಂದ
ಯಥೇಚ್ಛವಾಗಿ ಹಣ್ಣು ದೊರಕುವಂತೆ ಮಾಡುವೆನು.
ಹೊಲಗಳು ಒಳ್ಳೇ ಬೆಳೆಗಳನ್ನು ಕೊಡುವಂತೆ ಮಾಡಿ
ನೀನು ಅನ್ಯದೇಶದಲ್ಲಿ ಹಸಿವಿನಿಂದ ನರಳುವ ದಿವಸಗಳು
ತಿರುಗಿ ಬಾರದಂತೆ ಮಾಡುವೆನು. 31ನೀನು ಮಾಡಿದ
ದುಷ್ಟತನವನ್ನು ನೀನು ಜ್ಞಾಪಿಸಿಕೊಳ್ಳುವಿ. ಅವುಗಳು
ಒಳ್ಳೇದಲ್ಲ ಎಂಬುದನ್ನು ಅರಿತುಕೊಳ್ಳುವಿ. ಆಗ ನೀನು
ಮಾಡಿದ ಪಾಪಕೃತ್ಯಗಳಿಗಾಗಿ ನಿನ್ನನ್ನೇ ನೀನು ಹೇಸುವಿ.’’

32ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘‘ನೀನು ಇದನ್ನು ಜ್ಞಾಪಕದಲ್ಲಿಟ್ಟುಕೋ. ನಾನು ಈ
ಕಾರ್ಯಗಳನ್ನು ನಿನಗಾಗಿ ಮಾಡದೆ ನನ್ನ ನಾಮದ
ಘನತೆಗಾಗಿ ಮಾಡುತ್ತಿದ್ದೇನೆ. ಇಸ್ರೇಲ್ ಜನರೇ, ನಿಮ್ಮ
ಜೀವಿತದ ಕುರಿತಾಗಿ ನೀವು ನಾಚಿಕೆಯಿಂದ ವ್ಯಸನ
ಪಡುವವರಾಗಿರಬೇಕು.’’

33ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘‘ನಾನು ನಿನ್ನನ್ನು ನಿನ್ನ ಪಾಪಗಳಿಂದ ಶುದ್ಧೀಕರಿಸುವ
ದಿನದಲ್ಲಿ ನಿಮ್ಮ ಪಟ್ಟಣಗಳನ್ನು ಪುನರ್ ಸ್ಥಾಪಿಸುವೆನು.
ಮತ್ತು ಹಾಳುಬಿದ್ದ ಕಟ್ಟಡಗಳನ್ನು ಮತ್ತೆ ಕಟ್ಟುವೆನು.
34ಜನರು ಹೊಲದಲ್ಲಿ ತಿರುಗಿ ಕೆಲಸ ಮಾಡಲು ಪ್ರಾರಂಭಿ
ಸುವರು. ದಾಟಿ ಹೋಗುವ ಜನರು ಇನ್ನು ಮೇಲೆ ಪಾಳು
ಬಿದ್ದ ಕುರುಹುಗಳನ್ನು ಕಾಣರು. 35‘ಹಿಂದಿನ ಕಾಲದಲ್ಲಿ
ದೇಶವು ಹಾಳಾಗಿ ಹೋಗಿತ್ತು. ಈಗ ಇದು ಏದೆನ್
ತೋಟದಂತಿದೆ. ಪಟ್ಟಣಗಳು ನಾಶವಾಗಿದ್ದವು, ಬರಿದಾಗಿ
ದ್ದವು. ಈಗಲಾದರೊ ಅವು ಸುರಕ್ಷಿತವಾಗಿದ್ದು ಜನಭರಿತ
ವಾಗಿದೆ’’ ಎಂದು ಜನರು ಅನ್ನುವರು.

36ದೇವರು ಹೇಳುವದೇನೆಂದರೆ, ‘‘ಯೆಹೋವನಾದ
ನಾನೇ ಹಾಳುಬಿದ್ದ ಆ ಕಟ್ಟಡಗಳನ್ನು ಮತ್ತೆ ಕಟ್ಟಿದೆನೆಂದೂ
ಮತ್ತು ಬರಿದಾಗಿದ್ದ ಈ ದೇಶದಲ್ಲಿ ಬೆಳೆಯಿಸುವೆನೆಂದೂ
ನಿನ್ನ ಸುತ್ತಲೂ ಇನ್ನೂ ಇರುವ ಜನಾಂಗಗಳು ತಿಳಿದು
ಕೊಳ್ಳುವವು. ನಾನೇ ಯೆಹೋವನು. ಇವುಗಳನ್ನು ನಾನೇ
ಹೇಳಿದ್ದೇನೆ ಮತ್ತು ನಾನೇ ಇವುಗಳನ್ನು ನೆರ
ವೇರಿಸುವೆನು.’’

37ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ:
‘‘ಇಸ್ರೇಲ್ ಜನರು ನನ್ನ ಬಳಿಗೆ ಬಂದು ಹೀಗೆ ಮಾಡ
ಬೇಕೆಂದು ನನ್ನನ್ನು ಕೇಳಿಕೊಳ್ಳಲು ಅವಕಾಶ ಕೊಡು
ವೆನು. ನಾನು ಅವರನ್ನು ಅಭಿವೃದ್ಧಿಪಡಿಸಿ ಅವರ ಸಂಖ್ಯೆ
ಯನ್ನು ಕುರಿಹಿಂಡಿನೋಪಾದಿಯಲ್ಲಿ ಹೆಚ್ಚಿಸುವೆನು.
38ಹಬ್ಬದ ದಿವಸಗಳಲ್ಲಿ ಜೆರುಸಲೇಮ್ ಪರಿಶುದ್ಧ ಮಾಡ
ಲ್ಪಟ್ಟ ಮಂದೆಗಳಿಂದ ತುಂಬಿ ಹೋಗುವಂತೆ ಜನರು
ಹಾಳುಬಿದ್ದಿದ್ದ ನಗರ ಪಟ್ಟಣಗಳಲ್ಲಿ ತುಂಬಿಕೊಳ್ಳುವರು.
ಆಗ ನಾನೇ ದೇವರಾದ ಯೆಹೋವನು ಎಂದು ಅವರು
ತಿಳಿದುಕೊಳ್ಳುವರು.’’

### ಒಣಗಿದ ಎಲುಬುಗಳ ದರ್ಶನ

37 ಯೆಹೋವನ ಶಕ್ತಿಯು ನನ್ನ ಮೇಲೆ ಬಂದಿತು.
ಯೆಹೋವನ ಆತ್ಮವು ನನ್ನನ್ನು ನಗರ
ದೊಳಗಿಂದ ತೆಗೆದು ತಗ್ಗಿಗೆ ಕೊಂಡೊಯ್ದನು. ಆ ಬಯ
ಲಿನ ತುಂಬಾ ಒಣಗಿದ ಎಲುಬುಗಳು ತುಂಬಿದ್ದವು. 2ಆ
ಬಯಲಿನ ನೆಲದ ಮೇಲೆ ಅನೇಕಾನೇಕ ಒಣ ಎಲುಬು
ಗಳು ಬಿದ್ದುಕೊಂಡಿದ್ದವು. ಯೆಹೋವನು ನನ್ನನ್ನು ಆ
ಎಲುಬುಗಳ ನಡುವೆ ನಡೆಯುವಂತೆ ಮಾಡಿದನು. ಆ
ಎಲುಬುಗಳು ತೀರಾ ಒಣಗಿಹೋಗಿದ್ದವು.

3ಆಗ ನನ್ನ ಒಡೆಯನಾದ ಯೆಹೋವನು ನನ್ನೊಡನೆ
ಹೀಗೆ ಹೇಳಿದನು, ‘‘ನರಪುತ್ರನೇ, ಈ ಎಲುಬುಗಳಿಗೆ
ತಿರುಗಿ ಜೀವ ಬಂದೀತೋ?’’

ಅದಕ್ಕೆ ನಾನು, ‘‘ನನ್ನ ಒಡೆಯನಾದ ಯೆಹೋವನೇ,
ನೀನೇ ಬಲ್ಲೆ. ಈ ಪ್ರಶ್ನೆಗೆ ಉತ್ತರ ನಿನಗೇ ಗೊತ್ತಿದೆ.’’

4ಆಗ ಯೆಹೋವನು, ‘‘ನನ್ನ ಪರವಾಗಿ ಆ ಎಲುಬುಗ
ಳೊಂದಿಗೆ ಮಾತನಾಡು. ಅವುಗಳಿಗೆ ಹೀಗೆ ಹೇಳು:
‘ಒಣಗಿದ ಎಲುಬುಗಳೇ, ಯೆಹೋವನ ಮಾತನ್ನು
ಕೇಳಿರಿ. 5ನನ್ನ ಒಡೆಯನಾದ ಯೆಹೋವನು ಹೀಗೆ ಹೇಳಿ
ದ್ದಾನೆ, ‘ನಾನು ನಿಮಗೆ ಉಸಿರನ್ನು* ಬರುವಂತೆ ಮಾಡು
ವೆನು. ಆಗ ನೀವು ಜೀವಂತರಾಗುವಿರಿ. 6ನಾನು ನಿಮ್ಮಲ್ಲಿ

**ಉಸಿರು** ಅಥವಾ ಆತ್ಮ.

ಸ್ನಾಯುಗಳನ್ನೂ ನರಗಳನ್ನೂ ಬರಮಾಡುವೆನು. ಆಮೇಲೆ ನಿಮ್ಮನ್ನು ಚರ್ಮದಿಂದ ಹೊದಿಸುವೆನು. ಆಮೇಲೆ ನಿಮ್ಮಲ್ಲಿ ಶ್ವಾಸವನ್ನಿಟ್ಟು ನಿಮಗೆ ಜೀವ ಬರುವಂತೆ ಮಾಡುವೆನು. ಆಗ ನಾನು ಒಡೆಯನಾದ ಯೆಹೋವನು ಎಂದು ನೀವು ತಿಳಿದುಕೊಳ್ಳುವಿರಿ.'''

7ನಾನು ಎಲುಬುಗಳೊಂದಿಗೆ ಕರ್ತನ ಪರವಾಗಿ ಮಾತ
ನಾಡಿದೆನು. ನಾನು ಮಾತನಾಡುತ್ತಾ ಇರುವಾಗಲೇ ಒಂದು ದೊಡ್ಡ ಶಬ್ದವನ್ನು ಕೇಳಿದೆನು. ಎಲುಬುಗಳು ಅಲ್ಲಾಡತೊಡಗಿದವು, ಮತ್ತು ಒಂದಕ್ಕೊಂದು ಜೋಡಿಸ
ಲ್ಪಟ್ಟವು. 8ನನ್ನ ಕಣ್ಣೆದುರಿನಲ್ಲೇ ಅವುಗಳಿಗೆ ಸ್ನಾಯು
ಗಳು, ನರಗಳು ಬಂದವು. ಮತ್ತು ಚರ್ಮವು ಅವುಗಳನ್ನು ಮುಚ್ಚಿತು. ಆದರೆ ಆ ಶರೀರ ಚಲಿಸಲಿಲ್ಲ. ಯಾಕೆಂದರೆ ಅದರಲ್ಲಿ ಶ್ವಾಸವಿರಲಿಲ್ಲ.

9ಆಗ ನನ್ನ ಒಡೆಯನಾದ ಯೆಹೋವನು ಹೇಳಿದ್ದೇ
ನೆಂದರೆ, ''ನನ್ನ ಪರವಾಗಿ ಗಾಳಿಯೊಂದಿಗೆ ಮಾತನಾಡು. ನರಪುತ್ರನೇ, ಗಾಳಿಯೊಂದಿಗೆ ಮಾತನಾಡು. ಒಡೆಯನಾದ ಯೆಹೋವನು ಹೀಗೆ ಹೇಳುತ್ತಾನೆ, 'ಗಾಳಿಯೇ ಎಲ್ಲಾ ದಿಕ್ಕುಗಳಿಂದ ಬಂದು ಈ ಸತ್ತ ಶರೀರಗಳ ಮೇಲೆ ಊದು. ಅವರ ಮೇಲೆ ಗಾಳಿ ಊದು. ಆಗ ಅವುಗಳಿಗೆ ಜೀವ ಬರುವದು.'''

10ನಾನು ಯೆಹೋವನ ಪರವಾಗಿ ಗಾಳಿಗೆ ಆತನು ಹೇಳಿ
ದಂತೆಯೇ ಹೇಳಿದೆನು. ಆಗ ನಿರ್ಜೀವ ದೇಹಗಳೊಳಗೆ ಶ್ವಾಸವು ಹೊಕ್ಕಿತು. ಅವುಗಳಿಗೆ ಜೀವಬಂದು ನಿಂತುಕೊಂಡುವು. ಅಲ್ಲಿ ಅನೇಕ ಜನರಿದ್ದರು. ಒಂದು ದೊಡ್ಡ ಸೈನ್ಯದ ತರಹ ಜನ ಸಮೂಹವು ಅಲ್ಲಿತ್ತು.

11ಆಗ ಒಡೆಯನಾದ ಯೆಹೋವನು ನನಗೆ ಹೇಳಿದ್ದೇ
ನೆಂದರೆ, ''ನರಪುತ್ರನೇ, ಈ ಎಲುಬುಗಳು ಇಸ್ರೇಲ್ ಜನಾಂಗ. 'ನಮ್ಮ ಎಲುಬುಗಳು ಒಣಗಿ ಹೋಗಿವೆ. ನಮ್ಮ ನಿರೀಕ್ಷೆಯು ಮುಗಿದು ಹೋಯಿತು. ನಾವು ಸಂಪೂರ್ಣವಾಗಿ ನಾಶವಾಗಿ ಹೋಗಿದ್ದೇವೆ'ಎಂದು ಇಸ್ರೇಲರು
ಹೇಳುತ್ತಾರೆ. 12ಆದುದರಿಂದ ನನ್ನ ಪರವಾಗಿ ಅವ
ರೊಂದಿಗೆ ಮಾತನಾಡು. ಒಡೆಯನಾದ ಯೆಹೋವನು ಹೀಗೆ ಹೇಳುತ್ತಾನೆಂದು ಹೇಳು: 'ನನ್ನ ಜನರೇ, ನಾನು ನಿಮ್ಮ ಸಮಾಧಿಗಳನ್ನು ತೆರೆದು ನಿಮ್ಮನ್ನು ಹೊರತಂದು ನಿಮ್ಮ ಸ್ವದೇಶವಾದ ಇಸ್ರೇಲಿಗೆ ನಿಮ್ಮನ್ನು ಬರಮಾಡು
ವೆನು. 13ನನ್ನ ಜನರೇ, ನಿಮ್ಮನ್ನು ಸಮಾಧಿಯೊಳಗಿಂದ
ಎಬ್ಬಿಸಿ ತರುವೆನು. ಆಗ ನಾನೇ ಯೆಹೋವನೆಂದು ನೀವು ತಿಳಿಯುವಿರಿ.

14'''ನಾನು ನನ್ನ ಆತ್ಮವನ್ನು ನಿಮ್ಮಲ್ಲಿ ಇಡುವೆನು, ಆಗ
ನೀವು ತಿರುಗಿ ಜೀವ ಹೊಂದುವಿರಿ. ಅನಂತರ ನಿಮ್ಮನ್ನು ನಿಮ್ಮ ಸ್ವದೇಶಕ್ಕೆ ಬರಮಾಡುವೆನು. ಆಗ ನಾನೇ ಯೆಹೋವನೆಂದು ನೀವು ತಿಳಿಯುವಿರಿ. ನಾನು ಹೇಳಿದ್ದೆಲ್ಲ ಸಂಭವಿಸುತ್ತದೆ ಎಂದು ಆಗ ನಿಮಗೆ ತಿಳಿದು ಬರುವದು.''' ಇದು ಯೆಹೋವನ ನುಡಿ.

### ಯೆಹೂದ ಮತ್ತು ಇಸ್ರೇಲ್ ಒಂದಾಗುವದು

15ಯೆಹೋವನ ಸಂದೇಶ ನನಗೆ ತಿರುಗಿ ಬಂತು.
ಆತನು ಹೇಳಿದ್ದೇನೆಂದರೆ, 16''ನರಪುತ್ರನೇ, ಒಂದು
ದಂಡವನ್ನು ತೆಗೆದುಕೊಂಡು ಅದರ ಮೇಲೆ, 'ಈ ದಂಡವು ಯೆಹೂದಕ್ಕೂ ಅದರ ಸ್ನೇಹಿತರಾದ ಇಸ್ರೇಲರಿಗೂ ಸೇರಿದ್ದು' ಎಂದು ಬರೆ. ಆ ಮೇಲೆ ಇನ್ನೊಂದು ದಂಡವನ್ನು ತೆಗೆದುಕೊಂಡು ಅದರ ಮೇಲೆ ' ಎಫ್ರಾಯಿಮನ ಈ ದಂಡವು ಯೋಸೇಫನಿಗೂ ಅವನ ಸ್ನೇಹಿತರಾದ
ಇಸ್ರೇಲರಿಗೂ ಸೇರಿದ್ದು' ಎಂದು ಬರೆ. 17ಆ ಮೇಲೆ ಆ
ಎರಡೂ ದಂಡಗಳನ್ನು ನಿನ್ನ ಕೈಯಲ್ಲಿ ಕೂಡಿಸು. ಅದು ಒಂದೇ ದಂಡವಾಗುವದು.

18''ನಿನ್ನ ಜನರು ಅದು ಏನು ಎಂದು ವಿವರಿಸಲು ಹೇಳು
ವರು. 19ಅವರಿಗೆ ಹೀಗೆ ಹೇಳು: ಒಡೆಯನಾದ
ಯೆಹೋವನು ಹೇಳುವದೇನೆಂದರೆ, 'ನಾನು ಯೋಸೇಫನ ದಂಡವನ್ನು ಎಫ್ರಾಯೀಮ್ ಮತ್ತು ಅವನ ಸ್ನೇಹಿತರಾದ ಇಸ್ರೇಲರ ಕೈಯಿಂದ ತೆಗೆದುಕೊಂಡು ಅದನ್ನು ಯೆಹೂದದ ದಂಡದೊಂದಿಗೆ ಇಡುವೆನು. ಅದು ಒಂದೇ ದಂಡವಾಗುವದು. ಅದು ನನ್ನ ಕೈಯಲ್ಲಿ ಒಂದೇ ದಂಡವಾಗುವದು.'

20''ಆ ದಂಡಗಳನ್ನು ಕೈಯಲ್ಲಿ ಹಿಡಿದುಕೊಂಡು
ನಿನ್ನೆದುರಿಗೆ ಚಾಚು. ನೀನು ಅದರ ಮೇಲೆ ಹೆಸರು
ಬರೆದಿದ್ದೀ. 21ಯೆಹೋವನು ಹೀಗೆ ಹೇಳುತ್ತಾನೆ ಎಂದು
ಆ ಜನರಿಗೆ ಹೇಳು. 'ನಾನು ಇಸ್ರೇಲ್ ಜನರನ್ನು ಅವರು ಚದರಿದ ದೇಶಗಳಿಂದಲೂ ಸುತ್ತಲಿರುವ ದೇಶಗಳಿಂದಲೂ ಅವರನ್ನು ಒಟ್ಟುಗೂಡಿಸಿ ಅವರ ಸ್ವದೇಶಕ್ಕೆ
ತರುವೆನು. 22ಇಸ್ರೇಲಿನ ಪರ್ವತ ರಾಜ್ಯದಲ್ಲಿ ಅವರನ್ನು
ಒಂದು ಜನಾಂಗವನ್ನಾಗಿ ಮಾಡುವೆನು. ಅವರೆಲ್ಲರಿಗೂ ಒಬ್ಬನೇ ರಾಜನಿರುವನು. ಅವರು ಇನ್ನು ಮುಂದೆ ಎರಡು
ರಾಜ್ಯಗಳಾಗುವದಿಲ್ಲ. 23ಅವರು ಇನ್ನು ಮೇಲೆ
ವಿಗ್ರಹಗಳಿಂದ ತಮ್ಮನ್ನು ಹೊಲೆ ಮಾಡಿಕೊಳ್ಳುವದಿಲ್ಲ. ಅವರು ಪಾಪಮಾಡಿ ಸಿಕ್ಕಿಬಿದ್ದ ದೇವದ್ರೋಹದಿಂದೆಲ್ಲಾ ನಾನು ಅವರನ್ನು ಉದ್ಧರಿಸುವೆನು. ನಾನು ಅವರನ್ನು ತೊಳೆದು ಶುದ್ಧ ಮಾಡುವೆನು. ಅವರು ನನ್ನ ಜನರಾಗಿರುವರು. ನಾನು ಅವರ ದೇವರಾಗಿರುವೆನು.

24'''ನನ್ನ ಸೇವಕನಾದ ದಾವೀದನು ಅವರ ರಾಜನಾಗು
ವನು. ಅವರೆಲ್ಲರಿಗೆ ಒಬ್ಬನೇ ಕುರುಬನಿರುವನು. ನಾನು ಹೇಳಿದ ಮಾತುಗಳಿಗೆ ಅವರು ವಿಧೇಯರಾಗುವರು; ನನ್ನ
ಕಟ್ಟಳೆ ನಿಯಮಗಳಲ್ಲಿ ಅವರು ಬಾಳುವರು. 25ನಾನು
ನನ್ನ ಸೇವಕನಾದ ಯಾಕೋಬನಿಗೆ ಕೊಟ್ಟಿರುವ

ದೇಶದಲ್ಲಿ ಅವರು ವಾಸಿಸುವರು. ನಿಮ್ಮ ಪೂರ್ವಿಕರು ಆ
ಪ್ರಾಂತ್ಯದಲ್ಲಿ ವಾಸವಾಗಿದ್ದರು. ನನ್ನ ಜನರು ಅಲ್ಲಿಯೇ
ವಾಸಮಾಡುವರು. ಅವರೂ, ಅವರ ಮಕ್ಕಳೂ, ಮೊಮ್ಮ
ಕ್ಕಳೂ ಅಲ್ಲಿ ನಿತ್ಯಕಾಲಕ್ಕೂ ಜೀವಿಸುವರು. ನನ್ನ ಸೇವಕ
ನಾದ ದಾವೀದನು ಅವರ ನಿತ್ಯಕಾಲದ ರಾಜನು. 26ನಾನು
ಸಮಾಧಾನದ ಒಡಂಬಡಿಕೆಯನ್ನು ಅವರ ಜೊತೆ
ಮಾಡುವೆನು. ಇದು ನಿರಂತರದ ಒಡಂಬಡಿಕೆಯಾಗಿರು
ವದು. ನಾನು ಅವರ ಸ್ವದೇಶವನ್ನು ಹಿಂತಿರುಗಿಸಿ ಕೊಡು
ವೆನು. ಅವರನ್ನು ಅಭಿವೃದ್ಧಿಪಡಿಸಿ ಹೆಚ್ಚಿಸುವೆನು, ಮತ್ತು
ಅವರ ಮಧ್ಯೆ ನನ್ನ ಪವಿತ್ರ ಸ್ಥಳವನ್ನು ಇರಿಸುವೆನು. ಇದು
ನಿರಂತರವಾದ ಒಡಂಬಡಿಕೆ. 27ನನ್ನ ಪವಿತ್ರ ಗುಡಾರ
ಅವರೊಂದಿಗಿರುವದು. ಹೌದು, ಅವರು ನನ್ನ ಜನ
ರಾಗಿರುವರು. ನಾನು ಅವರ ದೇವರಾಗಿರುವೆನು.
28ಇತರ ದೇಶಗಳವರು ನಾನು ಯೆಹೋವನೆಂದು ತಿಳಿ
ಯುವರು. ಇಸ್ರೇಲರು ನನ್ನ ವಿಶೇಷ ಜನರೆಂದು ಅವರಿಗೆ
ತಿಳಿದುಬರುವದು. ಯಾಕೆಂದರೆ ಅವರ ಮಧ್ಯೆ ನನ್ನ
ಪರಿಶುದ್ಧ ಸ್ಥಾನವನ್ನು ನಿರಂತರಕ್ಕೂ ಇರಿಸುವೆನು.’’

### ಗೋಗಿನ ವಿಷಯವಾದ ದೈವೋಕ್ತಿ

38 ಯೆಹೋವನ ಸಂದೇಶ ನನಗೆ ಬಂದಿತು.
ಆತನು ಹೇಳಿದ್ದೇನೆಂದರೆ, 2‘‘ನರಪುತ್ರನೇ,
ಮಾಗೋಗ್ ದೇಶದಲ್ಲಿರುವ ಗೋಗಿನ ಕಡೆಗೆ ಮುಖ
ಮಾಡು. ಅವನು ಮೆಷೆಕ್ ಮತ್ತು ತೂಬಲ್ ದೇಶಗಳ
ಪ್ರಾಮುಖ್ಯ ನಾಯಕನು. ಅವನಿಗೆ ವಿರುದ್ಧವಾಗಿ ನನ
ಗೋಸ್ಕರ ಪ್ರವಾದಿಸು. 3ಅವನಿಗೆ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆ ಎಂದು ಹೇಳು.
‘ಗೋಗನೇ, ನೀನು ಮೆಷೆಕ್ ಮತ್ತು ತೂಬಲ್ ದೇಶದ
ಅತ್ಯಂತ ಪ್ರಭಾವಿ ನಾಯಕನಾಗಿರುತ್ತೀ. 4ನಾನು ನಿನ್ನ
ದವಡೆಗೆ ಕೊಕ್ಕೆ ಹಾಕಿ ನಿನ್ನನ್ನು ಸೆರೆಹಿಡಿದುಕೊಂಡು
ಬರುವೆನು. ನಿನ್ನೆಲ್ಲಾ ಭೂ ಸೈನಿಕರನ್ನೂ ನಿನ್ನೆಲ್ಲಾ ಕುದುರೆ
ಗಳನ್ನೂ ನಿನ್ನೆಲ್ಲಾ ರಾಹುತರನ್ನೂ ಬಂಧಿಸಿ ತರುವೆನು.
ನಿನ್ನ ಸೈನಿಕರು ಸಮವಸ್ತ್ರಧಾರಿಗಳಾಗಿ ಖೇಡ್ಯಶಿರಸ್ತ್ರಾಣ
ಗಳನ್ನು ತೊಟ್ಟುಕೊಂಡಿರುವಾಗಲೇ ಅವರನ್ನು ಬಂಧಿಸಿ
ತರುವೆನು. 5ಪರ್ಷಿಯ, ಇಥಿಯೋಪ್ಯ, ಮತ್ತು ಪೂಟ್
ದೇಶಗಳ ಸೈನಿಕರು ಆ ಸೈನ್ಯದಲ್ಲಿರುವರು. ಅವರೆಲ್ಲರೂ
ತಮ್ಮ ಆಯುಧಗಳನ್ನು ತೊಟ್ಟುಕೊಂಡಿರುವರು. 6ಅಲ್ಲಿ
ಗೋಮೆರ್ಯ ರಾಜ್ಯವು ತನ್ನ ಎಲ್ಲಾ ಸಿಪಾಯಿಗಳೊಂದಿಗೆ
ಇರುವುದು. ಬಹುದೂರದ ಉತ್ತರ ದಿಕ್ಕಿನಲ್ಲಿರುವ
ತೋಗರ್ಮ ರಾಜ್ಯವೂ ಇದರಲ್ಲಿ ಸೇರಿರುವದು. ಈ
ಕೈದಿಗಳ ಸಾಲಿನಲ್ಲಿ ಅನೇಕಾನೇಕ ಮಂದಿ ಇರುವರು.
7‘‘‘ಸಿದ್ಧರಾಗಿರಿ! ನಿಮ್ಮೊಂದಿಗೆ ಸೇರಿರುವ ಸೈನ್ಯ
ದೊಂದಿಗೆ ಸಿದ್ಧರಾಗಿರಿ. ನೀವು ಎಚ್ಚರವಾಗಿದ್ದು ಸಿದ್ಧ
ರಾಗಿರಬೇಕು. 8ಬಹು ಕಾಲದ ನಂತರ, ನಿಮ್ಮನ್ನು ಕೆಲಸಕ್ಕೆ
ತೆಗೆದುಕೊಳ್ಳಲಾಗುವುದು. ಆನಂತರದ ವರ್ಷಗಳಲ್ಲಿ,
ನೀವು ಯುದ್ಧದಿಂದ ಗುಣಹೊಂದಿರುವ ದೇಶಕ್ಕೆ ಬರು
ವಿರಿ. ಆ ದೇಶದಲ್ಲಿರುವ ಜನರು ತಾವು ಕಳುಹಿಸಲ್ಪಟ್ಟಿದ್ದ
ಅನೇಕ ದೇಶಗಳಿಂದ ಹಿಂತಿರುಗಿ ಬಂದು ಒಟ್ಟಾಗಿ ಸೇರಿದ
ವರಾಗಿದ್ದಾರೆ. ಅವರು ಇಸ್ರೇಲಿನ ಪರ್ವತಗಳಿಗೆ ಮತ್ತೆ
ಬರಮಾಡಲ್ಪಟ್ಟವರಾಗಿದ್ದಾರೆ. ಹಿಂದಿನ ಕಾಲದಲ್ಲಿ
ಅನೇಕ ಸಲ ಈ ಪರ್ವತಗಳು ಹಾಳು ಮಾಡಲ್ಪಟ್ಟಿದ್ದರೂ
ಸಹ ಈಗ ಜನರನ್ನು ಮತ್ತೆ ಕರೆದುಕೊಂಡು ಬರಲಾಗಿದೆ
ಮತ್ತು ಅವರೆಲ್ಲರೂ ಅಲ್ಲಿ ಸುರಕ್ಷಿತವಾಗಿ ನೆಲೆಸುವರು.
9ಆದರೆ ನೀನು ಮತ್ತು ಬೇರೆ ದೇಶಗಳ ಸೈನಿಕರು ಅವ
ರೊಂದಿಗೆ ಯುದ್ಧ ಮಾಡಲು ಬಿರುಗಾಳಿಯಂತೆಯೂ
ಕಾರ್ಮುಗಿಲಿನಂತೆಯೂ ಬರುವಿರಿ’’

10ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ,
‘‘ಆ ಸಮಯದಲ್ಲಿ ನಿನ್ನ ತಲೆಗೆ ಒಂದು ಆಲೋಚನೆಯು
ಹೊಳೆಯುವುದು. ನೀನು ಒಂದು ದುಷ್ಟ ಯೋಜನೆ
ಯನ್ನು ಮಾಡುವಿರಿ. 11‘ನಾನು ಹೋಗಿ ಇಸ್ರೇಲಿನಲ್ಲಿ
ರುವ ಗೋಡೆಯಿಲ್ಲದ ನಗರಗಳನ್ನು ವಶಮಾಡಿಕೊಳ್ಳು
ತ್ತೇನೆ; ಅವರು ಶಾಂತಿಯಿಂದ ನೆಲೆಸಿರುತ್ತಾರೆ; ತಾವು
ಸುರಕ್ಷಿತರಾಗಿದ್ದೇವೆ ಎಂದು ಕೊಂಡಿದ್ದಾರೆ. ಆದರೆ
ಅವರನ್ನು ರಕ್ಷಿಸಲು ಅವರ ಪಟ್ಟಣಗಳಿಗೆ ಕೋಟೆಗಳೇ
ಇಲ್ಲ. ಅವರ ಹೆಬ್ಬಾಗಿಲಿಗೆ ಚಿಲಕವಿಲ್ಲ. ಅವರಿಗೆ ಬಾಗಿಲು
ಸಹ ಇಲ್ಲ. 12ನಾನು ಅವರನ್ನು ಸೋಲಿಸಿ ಅವರ ಬಳಿ
ಯಲ್ಲಿರುವ ಎಲ್ಲಾ ಬೆಲೆಬಾಳುವ ವಸ್ತುಗಳನ್ನು ದೋಚಿ
ಕೊಳ್ಳುವೆನು. ಹಿಂದೆ ನಾಶವಾಗಿದ್ದು ಈಗ ಜನಭರಿತವಾಗಿ
ರುವ ಆ ನಗರಗಳ ಮೇಲೆ ಯುದ್ಧ ಮಾಡುವೆನು. ಈಗ
ಆ ಜನರಿಗೆ ದನಕರುಗಳೂ ಸ್ವತ್ತುಗಳೂ ಇವೆ. ಅವರು
ಲೋಕದ ನಟ್ಟನಡುವೆ ವಾಸಿಸುತ್ತಿದ್ದಾರೆ. ಬಲಾಢ್ಯ ದೇಶ
ಗಳು ಬೇರೆ ಬಲಾಢ್ಯ ದೇಶಗಳೊಂದಿಗೆ ಸಂಪರ್ಕಿಸಲು
ಇವರ ಮೂಲಕ ಹೋಗಲೇಬೇಕು’ ಎಂದು ನೀನು ಹೇಳಿ
ಕೊಳ್ಳುತ್ತಿರುವೆ.

13‘‘ಶೆಬ, ದೆದಾನ್ ಮತ್ತು ತಾರ್ಷೀಷಿನ ವ್ಯಾಪಾರಿಗಳು
ನಿನ್ನನ್ನು ನೋಡಿ,‘ನೀನು ಸೂರೆಮಾಡಲು ಬಂದಿರು
ವಿಯಾ? ಬೆಳ್ಳಿ ಬಂಗಾರಗಳನ್ನು ಪಶುಗಳನ್ನೂ ಬೆಲೆ
ಬಾಳುವ ವಸ್ತುಗಳನ್ನೂ ಕೊಳ್ಳೆಹೊಡೆಯಲು ನಿನ್ನ ಸೈನ್ಯ
ಸಮೇತವಾಗಿ ಬಂದಿರುವೆಯಾ?’’’ ಎಂದು
ವಿಚಾರಿಸುವರು.

14ದೇವರು ಹೇಳಿದ್ದೇನೆಂದರೆ, ‘‘ನರಪುತ್ರನೇ, ನನ್ನ
ಪರವಾಗಿ ಗೋಗನಿಗೆ ಹೇಳು, ನನ್ನ ಒಡೆಯನಾಗಿರುವ
ಯೆಹೋವನು ಇಂತೆನ್ನುತ್ತಾನೆ: ‘ನನ್ನ ಜನರು ಸಮಾಧಾನ
ದಿಂದಲೂ ಶಾಂತಿಯಿಂದಲೂ ಜೀವಿಸುತ್ತಿರುವಾಗ ನೀನು
ಅವರನ್ನು ವಶಮಾಡಲು ಬಂದಿರುವಿ. 15ಬಹು ದೂರದ

ಉತ್ತರದಿಕ್ಕಿನಲ್ಲಿರುವ ನಿನ್ನ ಸ್ಥಳದಿಂದ ಬರುವಿ. ನೀನು
ಬಹಳ ಜನರನ್ನು ನಿನ್ನ ಸಂಗಡ ಕರೆತರುವಿ. ಅವರೆಲ್ಲಾ
ಕುದುರೆಗಳ ಮೇಲೆ ಬರುವವರು. ನೀವು ಅತಿ ದೊಡ್ಡ ಮತ್ತು
ಬಲಾಢ್ಯ ಸೈನ್ಯವಾಗಿರುವಿರಿ. 16ನನ್ನ ಜನರಾದ
ಇಸ್ರೇಲಿನವರೊಂದಿಗೆ ಯುದ್ಧಕ್ಕೆ ಬರುವಿರಿ. ನೀವು ಕರೀ
ಮೋಡದಂತೆ ದೇಶವನ್ನು ಕವಿಯುವಿರಿ. ಆ ಸಮಯ
ಬಂದಾಗ ನನ್ನ ದೇಶಕ್ಕೆ ವಿರುದ್ಧವಾಗಿ ಯುದ್ಧ ಮಾಡಲು
ನಿಮ್ಮನ್ನು ತರಿಸುವೆನು. ಆಗ ಗೋಗ್ ಮತ್ತು ಅತನೊಂದಿ
ಗಿರುವ ರಾಜ್ಯಗಳು ನಾನು ಎಷ್ಟು ಸಾಮರ್ಥ್ಯಶಾಲಿ ಎಂದು
ತಿಳಿದುಕೊಳ್ಳುವರು. ಅವರು ನನ್ನನ್ನು ಗೌರವಿಸಲು ಕಲಿ
ಯುವರು. ನಾನು ಪವಿತ್ರನು ಎಂದು ತಿಳಿಯುವರು.
ನಾನು ನಿನಗೇನು ಮಾಡಬೇಕಿದ್ದೇನೆಂದು ಅವರು ಕಾದು
ನೋಡುವರು.'''

17ಇದು ನನ್ನ ಒಡೆಯನಾದ ಯೆಹೋವನ ನುಡಿ, ''ಆಗ
ನಾನು ನಿನ್ನ ವಿಷಯದಲ್ಲಿ ಹೇಳಿದ್ದು ಜನರ ಜ್ಞಾಪಕಕ್ಕೆ
ಬರುವದು. ನಾನು ಇದನ್ನು ನನ್ನ ಸೇವಕರಾದ
ಪ್ರವಾದಿಗಳಿಗೆ ತಿಳಿಸಿರುತ್ತೇನೆ ಎಂದು ಅರಿಯುವರು.
ಹಿಂದಿನ ಕಾಲದಲ್ಲಿ ಇಸ್ರೇಲ್ ಪ್ರವಾದಿಗಳು ನನ್ನ ಪರ
ವಾಗಿ ಮಾತನಾಡಿ ನೀವು ಅವರ ವಿರುದ್ಧವಾಗಿ ಯುದ್ಧಕ್ಕೆ
ಬರುವಿರೆಂದು ಹೇಳಿರುತ್ತೇನೆ ಎಂಬುದನ್ನು ತಮ್ಮ
ಜ್ಞಾಪಕಕ್ಕೆ ತರುವರು.''

18ನನ್ನ ಒಡೆಯನಾದ ಯೆಹೋವನು ಹೇಳಿದ್ದೇ
ನೆಂದರೆ, ''ಆ ಸಮಯದಲ್ಲಿ ಗೋಗನು ಇಸ್ರೇಲಿನ
ವಿರುದ್ಧವಾಗಿ ಯುದ್ಧಕ್ಕೆ ಬರುವಾಗ ನಾನು ಅವನ ಮೇಲೆ
ಕೋಪೋದ್ರಿಕ್ತನಾಗುವೆನು. 19ನನ್ನ ಸಿಟ್ಟಿನ ಭರದಲ್ಲಿ
ಪ್ರಮಾಣಮಾಡಿ ಹೇಳುವದೇನೆಂದರೆ, ಆ ಸಮಯದಲ್ಲಿ
ಇಸ್ರೇಲಿನಲ್ಲಿ ಭಾರಿ ಭೂಕಂಪವಾಗುವದು. 20ಆಗ ಜೀವ
ವುಳ್ಳ ಸಮಸ್ತವೂ ಹೆದರಿಕೆಯಿಂದ ನಡುಗುವವು. ನೀರಿ
ನಲ್ಲಿರುವ ಮೀನುಗಳು, ಆಕಾಶದ ಪಕ್ಷಿಗಳು, ಭೂಮಿಯ
ಮೇಲಿರುವ ಪ್ರಾಣಿಗಳು, ನೆಲದ ಮೇಲೆ ಹರಿದಾಡುವ
ವುಗಳೆಲ್ಲಾ ಭೀತಿಯಿಂದ ನಡುಗುವವು. ಪರ್ವತಗಳು
ಬಿದ್ದುಹೋಗುವವು, ಪ್ರತಿ ಒಂದು ಗೋಡೆಯ ನೆಲಕ್ಕೆ
ಬಿದ್ದು ಹೋಗುವದು.''

21ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ''ಇಸ್ರೇಲಿನ ಪರ್ವತಗಳಲ್ಲಿ ಗೋಗನಿಗೆ
ಭಯಂಕರ ಪರಿಸ್ಥಿತಿ ಉಂಟಾಗುವಂತೆ ಮಾಡುವೆನು.
ಅವನ ಸೈನಿಕರು ಭಯಗೊಂಡು ಒಬ್ಬರನ್ನೊಬ್ಬರು ಕತ್ತಿ
ಯಿಂದ ಕೊಲ್ಲುವರು. 22ನಾನು ಗೋಗನನ್ನು ರೋಗ
ಮರಣಗಳಿಂದ ಶಿಕ್ಷಿಸುವೆನು. ಅವನ ಮೇಲೆಯೂ ಅವ
ನೊಂದಿಗೆ ಬಂದ ಬಹು ದೇಶದ ಸೈನಿಕರ ಮೇಲೆಯೂ
ಆಲಿಕಲ್ಲು, ಬೆಂಕಿ, ಗಂಧಕದ ಮಳೆಯಿಂದ ಶಿಕ್ಷಿಸುವೆನು.
23ನಾನು ಎಷ್ಟು ಶಕ್ತಿಶಾಲಿ ಎಂದು ತೋರಿಸುವೆನು. ನಾನು
ಪವಿತ್ರನು ಎಂದು ಅವರಿಗೆ ತೋರಿಸುವೆನು. ಅನೇಕ
ಜನಾಂಗಗಳು ನಾನು ಯಾರು ಎಂದು ತಿಳಿಯುವರು.
ನಾನು ಯೆಹೋವನೆಂದು ಆಗ ಅವರು ತಿಳಿಯುವರು.''

### ಗೋಗ್ ಮತ್ತು ಅವನ ಸೈನ್ಯದ ಅಂತ್ಯ

39 ''ನರಪುತ್ರನೇ, ನನ್ನ ಪರವಾಗಿ ಗೋಗನಿಗೆ
ವಿರುದ್ಧವಾಗಿ ಹೇಳು. ನನ್ನ ಒಡೆಯನಾದ
ಯೆಹೋವನು ಇಂತೆನ್ನುತ್ತಾನೆಂದು ಅವನಿಗೆ ಹೇಳು:
'ಗೋಗನೇ, ನೀನು ಮೆಷೆಕ್ ಮತ್ತು ತೂಬಲ್ ದೇಶಗಳ
ಪ್ರಮುಖ ನಾಯಕನು. ಆದರೆ ನಾನು ನಿನಗೆ ವಿರುದ್ಧ
ವಾಗಿದ್ದೇನೆ. 2ನಾನು ನಿನ್ನನ್ನು ಸೆರೆಹಿಡಿದು ಅತ್ಯಂತ ಉತ್ತರ
ದಿಕ್ಕಿನಿಂದ ನಿನ್ನನ್ನು ಬರಮಾಡಿ ಇಸ್ರೇಲಿನ ಪರ್ವತಗಳ
ವಿರುದ್ಧವಾಗಿ ಯುದ್ಧ ಮಾಡಿಸುವೆನು. 3ಆದರೆ ನಾನು
ನಿನ್ನ ಎಡಗೈಯಲ್ಲಿರುವ ಬಿಲ್ಲಿಗೆ ಹೊಡೆಯುವೆನು, ಮತ್ತು
ನಿನ್ನ ಬಲಗೈಯಲ್ಲಿರುವ ಬಾಣವು ಬಿದ್ದುಹೋಗುವುದು!
4ನೀನು ಇಸ್ರೇಲಿನ ಪರ್ವತದಲ್ಲಿ ಸಾಯುವಿ. ನೀನೂ, ನಿನ್ನ
ಎಲ್ಲಾ ಸೈನ್ಯ, ನಿನ್ನೊಂದಿಗೆ ಬಂದಿದ್ದ ಇತರ ದೇಶದವರೆಲ್ಲಾ
ರಣರಂಗದಲ್ಲಿ ಸಾಯುವರು. ನಿಮ್ಮ ಹೆಣಗಳನ್ನು
ಆಕಾಶದ ಸಕಲ ಮಾಂಸಹಾರಿ ಪಕ್ಷಿಗಳಿಗೂ, ಕಾಡು ಪ್ರಾಣಿ
ಗಳಿಗೂ ಆಹಾರವಾಗಿ ಕೊಡುವೆನು. 5ನೀನು ನಗರವನ್ನು
ಪ್ರವೇಶಿಸುವದಿಲ್ಲ. ನಗರದ ಹೊರಗೆ ಹೊಲದಲ್ಲಿ ನೀನು
ಕೊಲ್ಲಲ್ಪಡುವಿ. ಇದನ್ನು ನಾನು ನುಡಿದಿದ್ದೇನೆ.''' ಈ
ಸಂಗತಿಗಳನ್ನು ನನ್ನ ಒಡೆಯನಾದ ಯೆಹೋವನು
ನುಡಿದನು.

6ದೇವರು ಹೇಳಿದ್ದೇನೆಂದರೆ, ''ನಾನು ಮಾಗೋಗ್
ಮತ್ತು ಕಡಲ ತೀರದಲ್ಲಿ ವಾಸಿಸುವ ಜನರ ಮೇಲೆ ಬೆಂಕಿ
ಯನ್ನು ಕಳುಹಿಸುತ್ತೇನೆ. ತಾವು ಸುರಕ್ಷಿತವಾಗಿದ್ದೇವೆ
ಎಂದು ಅವರು ನೆನಸುತ್ತಾರೆ. ಆದರೆ ನಾನು ಯೆಹೋ
ವನು ಎಂದು ಅವರಿಗೆ ತಿಳಿಯುವದು. 7ನನ್ನ ಜನರಾದ
ಇಸ್ರೇಲರಲ್ಲಿ ನನ್ನ ಪವಿತ್ರನಾಮವನ್ನು ಪ್ರಸಿದ್ಧಿ ಪಡಿಸು
ವೆನು. ಅವರು ನನ್ನ ಪವಿತ್ರ ನಾಮವನ್ನು ಇನ್ನು ಮುಂದೆ
ಅವಮಾನಕ್ಕೆ ಗುರಿಪಡಿಸುವದಿಲ್ಲ. ರಾಜ್ಯಗಳೆಲ್ಲಾ ನಾನು
ಯೆಹೋವನೆಂದು ಅರಿತುಕೊಳ್ಳುವರು. ನಾನೇ ಇಸ್ರೇ
ಲಿನ ಪವಿತ್ರನಾದ ದೇವರು ಎಂದು ತಿಳಿಯುವರು. 8ಅದು
ಸಂಭವಿಸುವ ಸಮಯವು ಹತ್ತಿರ ಬಂದಿತು.'' ಇದು
ಯೆಹೋವನ ನುಡಿ. ''ಆ ದಿವಸದ ವಿಷಯವಾಗಿ ನಾನು
ಮಾತನಾಡುತ್ತಿದ್ದೇನೆ.

9''ಆ ಸಮಯದಲ್ಲಿ ಇಸ್ರೇಲಿನ ನಗರಗಳಲ್ಲಿ ವಾಸಿಸುವ
ಜನರು ಹೊರಗೆ ಬಯಲಿಗೆ ಹೋಗುವರು. ಅಲ್ಲಿ ಅವರು
ವೈರಿಗಳ ಆಯುಧಗಳನ್ನು ಕೂಡಿಸಿ ಸುಟ್ಟುಬಿಡುವರು.
ಎಲ್ಲಾ ಬಿಲ್ಲುಬಾಣಗಳನ್ನು, ಗುರಾಣಿ, ಬರ್ಜಿ, ಗದೆಗಳ
ನ್ನೆಲ್ಲಾ ಬೆಂಕಿಯಲ್ಲಿ ಹಾಕುವರು. ಏಳು ವರ್ಷಗಳ ತನಕ

ಈ ಆಯುಧಗಳನ್ನು ಸೌದೆಯಾಗಿ ಉಪಯೋಗಿಸುವರು.
[10]ಆದುದರಿಂದ ಅವರಿಗೆ ಅಡವಿಯಿಂದ ಮತ್ತು
ಬಯಲಿನಿಂದ ಸೌದೆಯನ್ನು ತೆಗೆಯುವ ಆವಶ್ಯಕತೆ
ಇರುವದಿಲ್ಲ. ಅವರು ಸತ್ತ ಸೈನಿಕರಿಂದ ಬೆಲೆಬಾಳುವ ವಸ್ತು
ಗಳನ್ನು ದೋಚುವರು. ತಮ್ಮಿಂದ ದೋಚಿದ ಸೈನಿಕರಿಂದ
ಅವರು ದೋಚುವರು.’’ ಇದು ಒಡೆಯನಾದ
ಯೆಹೋವನ ನುಡಿ.

[11]ದೇವರು ಹೇಳಿದ್ದೇನೆಂದರೆ, ‘‘ಆ ಸಮಯದಲ್ಲಿ
ಗೋಗನನ್ನು ಹೂಣಿಡಲು ನಾನು ಇಸ್ರೇಲಿನಲ್ಲಿ ಸ್ಥಳವನ್ನು
ಆರಿಸುತ್ತೇನೆ. ಇವನನ್ನು ಮೃತ್ಯು ಸಮುದ್ರದ ಪೂರ್ವ
ದಲ್ಲಿರುವ ‘‘ಪ್ರಯಾಣಿಕರ ಕಣಿವೆ’’*ಯಲ್ಲಿ ಸಮಾಧಿ
ಮಾಡಲಾಗುವುದು. ಅದು ಪ್ರವಾಸಿಗಳಿಗೆ ಅಡ್ಡಿ
ಯಾಗುವದು. ಯಾಕೆಂದರೆ ಗೋಗನೂ ಅವನ ಸೈನ್ಯವೂ
ಅಲ್ಲಿ ಹೂಣಿಡಲ್ಪಡುವದು. ಆ ಸ್ಥಳ ‘ಗೋಗ್ ಸೈನ್ಯದ
ತಗ್ಗು’ ಎಂಬ ಹೊಸ ಹೆಸರಿನಿಂದ ಕರೆಯಲ್ಪಡು
ವದು.[12]ಇವರನ್ನೆಲ್ಲಾ ಸಮಾಧಿ ಮಾಡಲು ಇಸ್ರೇಲರಿಗೆ
ಏಳು ತಿಂಗಳು ಬೇಕಾಗುವದು. ತಮ್ಮ ರಾಜ್ಯವನ್ನು ಶುದ್ಧ
ಪಡಿಸಲು ಅವರು ಹಾಗೆ ಮಾಡಲೇಬೇಕು. [13]ಸಾಮಾನ್ಯ
ಜನರು ಶತ್ರು ಸೈನಿಕರನ್ನು ಹೂಣಿಡುವರು. ನಾನು ನನ್ನ
ಹೆಸರನ್ನು ಪ್ರಸಿದ್ಧಿಗೆ ತರುವ ದಿವಸ ಆ ಜನರು ಪ್ರಸಿದ್ಧ
ರಾಗುವರು.’’ ಇದು ನನ್ನ ಒಡೆಯನಾದ ಯೆಹೋವನ
ನುಡಿ.

[14]‘‘ಹೆಣಗಳನ್ನು ಹೂಳಿಟ್ಟು ದೇಶವನ್ನು ಶುದ್ಧ
ಗೊಳಿಸುವ ಕೆಲಸಗಾರರಿಗೆ ಖಾಯಂ ಕೆಲಸ ಕೊಡ
ಲಾಗುವದು. ಅವರು ದೇಶದಲ್ಲೆಲ್ಲಾ ಹೆಣಗಳನ್ನು
ಹುಡುಕಿ ತೆಗೆಯುವರು. ಅವರಿಗೆ ಏಳು ತಿಂಗಳು
ಬೇಕಾಗುವದು. [15]ಅವರಲ್ಲೊಬ್ಬನಿಗೆ ಒಂದು ಎಲುಬು
ನೋಡಸಿಕ್ಕಿದರೆ ಅವನು ಅಲ್ಲಿ ಒಂದು ಗುರುತನ್ನಿಡು
ವನು. ಹೂಣಿಡುವವರು ಬಂದು ಆ ಎಲುಬನ್ನು ತೆಗೆದು
ಗೋಗನ ಸೈನ್ಯದ ತಗ್ಗಿನಲ್ಲಿ ಹೂಣಿಡುವ ತನಕ ಆ ಗುರುತು
ಅಲ್ಲಿಯೇ ಇರುವದು. [16]ಸತ್ತವರ ಆ ನಗರವನ್ನು
(ಸಮಾಧಿ)ಹಮೋನ* ಎಂದು ಕರೆಯಲಾಗುವದು. ಈ
ರೀತಿಯಾಗಿ ಅವರು ದೇಶವನ್ನು ಶುದ್ಧ ಮಾಡುವರು.’’

[17]ನನ್ನ ಒಡೆಯನಾದ ಯೆಹೋವನು ಹೇಳಿದ್ದೇ
ನೆಂದರೆ, ‘‘ನರಪುತ್ರನೇ, ಎಲ್ಲಾ ಪಕ್ಷಿಗಳಿಗೂ, ಕಾಡು
ಪ್ರಾಣಿಗಳಿಗೂ, ಹೀಗೆ ಹೇಳು: ‘ನೀವೆಲ್ಲಾ ಕೂಡಿ ಬನ್ನಿರಿ.
ನಾನು ನಿಮಗಾಗಿ ಇಸ್ರೇಲಿನ ಪರ್ವತಗಳಲ್ಲಿ ಮಾಡುವ
ಮಹಾ ಯಜ್ಞಕ್ಕೆ ಎಲ್ಲಾ ಕಡೆಯಿಂದಲೂ ನೆರೆದು ಬಂದು
ಮಾಂಸವನ್ನು ತಿಂದು ರಕ್ತವನ್ನು ಕುಡಿಯಿರಿ. [18]ನೀವು ರಣ
ವೀರರ ಮಾಂಸವನ್ನು ತಿನ್ನುವಿರಿ, ಪ್ರಪಂಚದ ನಾಯಕರ
ರಕ್ತವನ್ನು ಕುಡಿಯುವಿರಿ. ಅವರೆಲ್ಲಾ ಬಾಷಾನಿನ ಕುರಿ,
ಹೋತ, ಹೋರಿಗಳಂತೆ ಕೊಬ್ಬಿಕೊಂಡಿದ್ದಾರೆ. [19]ನಿಮ
ಗಾಗಿ ವಧಿಸಿರುವ ಯಜ್ಞ ಪಶುಗಳ ಮಾಂಸವನ್ನು ಹೊಟ್ಟೆ
ತುಂಬ ತಿನ್ನಿರಿ; ಅಮಲೇರುವ ತನಕ ರಕ್ತವನ್ನು
ಕುಡಿಯಿರಿ. [20]ನನ್ನ ಈ ಔತಣದಲ್ಲಿ ಕುದುರೆಗಳ,
ರಾಹುತರ, ಶೂರರ ಮತ್ತು ಸೈನಿಕರ ಮಾಂಸವನ್ನು ಬೇಕಾ
ದಷ್ಟು ತಿನ್ನುವಿರಿ.’’’ ನನ್ನ ಒಡೆಯನಾದ ಯೆಹೋವನ
ನುಡಿಗಳಿವು.

[21]ದೇವರು ಹೇಳಿದ್ದೇನೆಂದರೆ, ‘‘ನಾನು ಮಾಡಿದ್ದನ್ನು
ಇತರ ದೇಶಗಳವರು ನೋಡುವಂತೆ ಮಾಡುವೆನು. ಆಗ
ಆ ದೇಶದವರು ನನ್ನನ್ನು ಗೌರವಿಸಲು ಪ್ರಾರಂಭಿಸು
ವರು. ಆ ಶತ್ರುವಿಗೆದುರಾಗಿ ನನ್ನ ಸಾಮರ್ಥ್ಯ ತೋರಿಸಿ
ದುದನ್ನು ಅವರು ನೋಡುವರು. [22]ಆ ದಿವಸದಿಂದ
ಇಸ್ರೇಲಿನ ಜನಾಂಗ ನಾನು ಅವರ ಒಡೆಯನಾದ
ಯೆಹೋವನೆಂದು ಅರಿಯುವರು. [23]ಎಲ್ಲಾ ಜನಾಂಗಗ
ಳವರಿಗೆ ನಾನು ಯಾಕೆ ಇಸ್ರೇಲರು ಸೆರೆಹಿಡಿಯಲ್ಪಟ್ಟು
ಚದರಿ ಹೋಗುವಂತೆ ಮಾಡಿದೆನು ಎಂದು ತಿಳಿಯು
ವರು. ನನ್ನ ಜನರು ನನಗೆ ವಿರುದ್ಧವಾಗಿ ತಿರುಗಿ ಬಿದ್ದರು.
ಆಗ ನಾನು ಅವರಿಂದ ದೂರ ಹೋದೆನು. ಅವರ ವೈರಿ
ಗಳು ಅವರನ್ನು ಸೋಲಿಸುವಂತೆ ಮಾಡಿದೆನು. ಆದುದ
ರಿಂದ ಅವರು ರಣರಂಗದಲ್ಲಿ ಮಡಿದರು. [24]ಅವರು
ಪಾಪಮಾಡಿ ತಮ್ಮನ್ನು ಅಶುದ್ಧರನ್ನಾಗಿ ಮಾಡಿ
ಕೊಂಡರು. ಅದಕ್ಕಾಗಿ ನಾನು ಅವರನ್ನು ಶಿಕ್ಷಿಸಿದೆನು. ಅವ
ರಿಂದ ನಾನು ದೂರವಾಗಿ ಅವರಿಗೆ ಸಹಾಯ ಮಾಡಲು
ನಿರಾಕರಿಸಿದೆನು.’’

[25]ಆದುದರಿಂದ ನನ್ನ ಒಡೆಯನಾದ ಯೆಹೋವನು
ಹೇಳುವದೇನೆಂದರೆ, ‘‘ಈಗ ನಾನು ಯಾಕೋಬನ
ಸಂತಾನದವರನ್ನು ಸೆರೆಯಿಂದ ಬಿಡಿಸಿ ಹಿಂದಕ್ಕೆ ತರುವೆನು.
ಇಸ್ರೇಲಿನ ಜನಾಂಗದವರ ಮೇಲೆಲ್ಲಾ ನನ್ನ ದಯೆ
ಇರುವದು. ನನ್ನ ಪವಿತ್ರ ನಾಮದ ಸಲುವಾಗಿ ಅವ ರನ್ನು
ಉದ್ಧರಿಸುವೆನು. [26]ಆ ಜನರು ತಮಗೊದಗಿದ ಅವ
ಮಾನವನ್ನೂ, ನನಗೆ ವಿರುದ್ಧವಾಗಿ ವರ್ತಿಸಿದ್ದನ್ನೂ
ಮರೆತುಬಿಡುವರು. ತಮ್ಮ ಸ್ವದೇಶದಲ್ಲಿ ಸುರಕ್ಷಿತವಾಗಿ
ವಾಸಿಸುವರು. ಅವರು ಯಾರಿಗೂ ಹೆದರಬೇಕಾಗಿಲ್ಲ.
[27]ಬೇರೆಬೇರೆ ದೇಶಗಳಿಂದ ನಾನು ನನ್ನ ಜನರನ್ನು
ಹಿಂದಕ್ಕೆ ತರಿಸುವೆನು. ಅವರ ಶತ್ರುಗಳ ದೇಶದಿಂದ ನಾನು
ಅವರನ್ನು ಒಟ್ಟುಗೂಡಿಸುವೆನು. ಆಗ ಎಷ್ಟೋ ಜನಾಂಗ
ಗಳು ನಾನು ಎಷ್ಟು ಪವಿತ್ರನೆಂದು ಅರಿತುಕೊಳ್ಳುವರು.

---

**ಪ್ರಯಾಣಿಕರ ಕಣಿವೆ** ‘‘ಅರಾಬಾ’’ ಎಂಬ ಪದದ ಮೇಲೆ ಇಲ್ಲಿ ಶಬ್ದ ಚಮತ್ಕಾರವನ್ನು ಬಳಸಲಾಗಿದೆ. ‘‘ಅರಾಬ’’ ಎಂದರೆ ಮರುಭೂಮಿ. ‘‘ಅವರಿಮ್’’ ಎಂದರೆ ಪ್ರಯಾಣಿಕರು ಕಣಿವೆಯನ್ನು ಸಮಾಧಿಮಾಳವನ್ನಾಗಿ ಪರಿವರ್ತಿಸಿದ್ದುದರಿಂದ ಭೂಮಿಯ ಅಶುದ್ಧವಾಗುತ್ತಿದ್ದ ಕಾರಣ ದಿಂದ ಪ್ರಯಾಣಿಕರು ಆ ಸ್ಥಳವನ್ನು ಸುತ್ತಿಕೊಂಡು ಹೋಗಬೇಕಾಗುತ್ತಿತ್ತು.

**ಹಮೋನ** ಈ ಹೀಬ್ರೂ ಪದದ ಅರ್ಥ ‘‘ಗುಂಪು.’’

28ನಾನು ಅವರ ಒಡೆಯನಾದ ಯೆಹೋವನೆಂದು ತಿಳಿ
ಯುವರು. ಯಾಕೆಂದರೆ ನಾನು, ಅವರು ಸ್ವದೇಶವನ್ನು
ಬಿಟ್ಟು ಸೆರೆಹಿಡಿಯಲ್ಪಟ್ಟವರಾಗಿ ಬೇರೆ ದೇಶಗಳಿಗೆ
ಹೋಗುವಂತೆ ಮಾಡಿದೆನು. ಆಮೇಲೆ ತಿರುಗಿ ಅವರನ್ನು
ಒಟ್ಟುಗೂಡಿಸಿ ಅವರ ದೇಶಕ್ಕೆ ಹಿಂದಕ್ಕೆ ಕರೆಸಿದೆನು.
29ಇಸ್ರೇಲ್ ಜನಾಂಗದವರ ಮೇಲೆ ನನ್ನ ಆತ್ಮವನ್ನು
ಸುರಿಸುವೆನು. ಅನಂತರ ನಾನು ಎಂದಿಗೂ ಅವರಿಗೆ
ವಿಮುಖನಾಗಿರುವದಿಲ್ಲ.'' ಇದು ನನ್ನ ಒಡೆಯನಾದ
ಯೆಹೋವನ ನುಡಿ.

## ಹೊಸ ಆಲಯ

40 ನಾವು ಸೆರೆಹಿಡಿಯಲ್ಪಟ್ಟ ಇಪ್ಪತ್ತೈದನೆ ವರ್ಷದ
ಪ್ರಾರಂಭದ ತಿಂಗಳಿನ (ಅಕ್ಟೋಬರ್)
ಹತ್ತನೇ ದಿವಸದಲ್ಲಿ ಯೆಹೋವನ ಆತ್ಮನಿಂದ ಪರವಶ
ನಾದೆನು. ಬಾಬಿಲೋನಿಯರು ಜೆರುಸಲೇಮನ್ನು ವಶ
ಪಡಿಸಿಕೊಂಡ ಹದಿನಾಲ್ಕನೇ ವರ್ಷದಲ್ಲಿ ಇದು ಸಂಭವಿ
ಸಿತು. ಆ ದಿವಸದಲ್ಲಿ ಯೆಹೋವನ ಆತ್ಮನಿಂದ ನಾನು
ಪರವಶನಾದೆನು. ಆತನು ನನ್ನನ್ನು ಅಲ್ಲಿಗೆ ದರ್ಶನದಲ್ಲಿ
ಕೊಂಡೊಯ್ದನು.

2ದರ್ಶನವೊಂದರಲ್ಲಿ ಯೆಹೋವನು ನನ್ನನ್ನು
ಇಸ್ರೇಲ್ ದೇಶಕ್ಕೆ ಒಯ್ದನು. ಆತನು ನನ್ನನ್ನು ಬಹಳ
ಉನ್ನತ ಪರ್ವತದ ಬಳಿ ಇರಿಸಿದನು. ನನ್ನೆದುರಿಗಿದ್ದ ಆ
ಪರ್ವತ ಒಂದು ನಗರದಂತೆ ಕಂಡಿತು. 3ಯೆಹೋವನು
ನನ್ನನ್ನು ಅಲ್ಲಿಗೆ ಕರೆತಂದನು. ಅಲ್ಲಿ ಒಬ್ಬನು ತಾಮ್ರದಂತೆ
ಹೊಳೆಯುತ್ತಿದ್ದನು. ಅವನ ಕೈಯಲ್ಲಿ ಅಳತೆಯ ನೂಲೂ,
ಅಳತೆ ಕೋಲೂ ಇದ್ದವು. ಅವನು ದ್ವಾರದ ಬಳಿಯಲ್ಲಿ
ನಿಂತಿದ್ದನು. 4ಆಗ ಅವನು ಹೀಗೆ ಹೇಳಿದನು, ''ನರ
ಪುತ್ರನೇ, ನೀನು ನಿನ್ನ ಕಣ್ಣು, ಕಿವಿಗಳನ್ನು ಉಪಯೋ
ಗಿಸು. ಇವೆಲ್ಲವನ್ನೂ ಗಮನಿಸಿ ನನ್ನ ಮಾತುಗಳನ್ನು ಕೇಳು.
ನಾನು ತೋರಿಸುವ ಪ್ರತಿಯೊಂದು ವಸ್ತುಗಳ ಮೇಲೆ
ಚೆನ್ನಾಗಿ ಲಕ್ಷ್ಯವಿಡು. ಯಾಕೆಂದರೆ ಈ ವಿಷಯಗಳನ್ನು
ನಿನಗೆ ತೋರಿಸಬೇಕೆಂದೇ ನಿನ್ನನ್ನು ಇಲ್ಲಿಗೆ ತಂದಿರುವೆ.
ನೀನು ನೋಡಿದ್ದೆಲ್ಲವನ್ನೂ ಇಸ್ರೇಲ್ ಸಂತತಿಯವರಿಗೆ
ತಿಳಿಸಬೇಕು.''

5ಆಲಯದ ಹೊರಗಿನಿಂದ ಸುತ್ತಲೂ ಗೋಡೆ ಇರುವ
ದನ್ನು ನಾನು ಕಂಡೆನು. ಅವನ ಕೈಯಲ್ಲಿ ಅಳತೆಯ
ಕೋಲಿತ್ತು. ಅದು ಉದ್ದ ಅಳತೆಯಲ್ಲಿ* ಆರು ಮೊಳ*
ಉದ್ದವಾಗಿತ್ತು. ಅವನು ಗೋಡೆಯ ಅಗಲವನ್ನು ಅಳತೆ
ಮಾಡಿದಾಗ, ಅದು ಒಂದು ಕೋಲು ಅಗಲವಾಗಿತ್ತು.
ಅವನು ಗೋಡೆಯ ಎತ್ತರವನ್ನು ಅಳತೆ ಮಾಡಿದಾಗ ಅದು
ಒಂದು ಕೋಲು ಎತ್ತರವಾಗಿತ್ತು.

6ಅವನು ಪೂರ್ವದ ದ್ವಾರಕ್ಕೆ ಹೋದನು. ಅವನು
ಅದರ ಮೆಟ್ಟಲುಗಳ ಬಳಿಗೆ ಹೋಗಿ ದ್ವಾರದ ಅಗಲವನ್ನು
ಅಳತೆಮಾಡಿದನು. ಅದು ಒಂದು ಅಳತೆಕೋಲು ಅಗಲ
ವಾಗಿತ್ತು. 7ದ್ವಾರಪಾಲಕರ ಕೋಣೆಗಳ ಉದ್ದಗಲವು
ಒಂದು ಅಳತೆಕೋಲಿನಷ್ಟಿತ್ತು. ಆ ಕೋಣೆಗಳ ನಡುವೆ
ಇದ್ದ ಗೋಡೆಯ ಅಗಲ ಐದು ಮೊಳ ಆಲಯಕ್ಕೆ
ಎದುರಾಗಿದ್ದ ಹೆಬ್ಬಾಗಿಲ ಕೈಸಾಲೆಯ ಹೊಸ್ತಿಲಿನ ಅಗಲವು
ಕೂಡಾ ಒಂದು ಅಳತೆ ಕೋಲಿನಷ್ಟಿತ್ತು. 8ಅವನು
ಕೈಸಾಲೆಯನ್ನು ಅಳತೆ ಮಾಡಿದನು. 9ಅದು ಎಂಟು ಮೊಳ
ಉದ್ದವಾಗಿತ್ತು. ದ್ವಾರದ ಎರಡು ಪಕ್ಕಗಳ ಗೋಡೆಯನ್ನು
ಅವನು ಅಳತೆ ಮಾಡಿದನು. ಅವು ಎರಡು ಮೊಳ ಅಗಲ
ವಿದ್ದವು. ಆಲಯಕ್ಕೆ ಎದುರಾಗಿದ್ದ ದ್ವಾರದ ಕೊನೆಯಲ್ಲಿ
ಕೈಸಾಲೆಯಿತ್ತು. 10ದ್ವಾರದ ಎರಡು ಬದಿಗಳಲ್ಲಿಯೂ
ಮೂರು ಸಣ್ಣ ಕೋಣೆಗಳಿದ್ದವು. ಈ ಕೋಣೆಗಳೆಲ್ಲವೂ
ಒಂದೇ ಅಳತೆಯುಳ್ಳವುಗಳಾಗಿದ್ದವು. ಆವುಗಳ ಗೋಡೆ
ಗಳೂ ಸಮಾನ ಅಳತೆಯುಳ್ಳವುಗಳಾಗಿದ್ದವು. 11ಅವನು
ದ್ವಾರದ ಪ್ರವೇಶ ಸ್ಥಳವನ್ನು ಅಳತೆಮಾಡಿದಾಗ ಅದು
ಹತ್ತು ಮೊಳ ಅಗಲ ಮತ್ತು ಹದಿಮೂರು ಮೊಳ
ಉದ್ದವಾಗಿತ್ತು. 12ಪ್ರತೀ ಕೋಣೆಯೆದುರು ತಗ್ಗಾದ
ಗೋಡೆಯಿತ್ತು. ಅದು ಒಂದು ಮೊಳ ಎತ್ತರ, ಒಂದು
ಮೊಳ ದಪ್ಪವಾಗಿತ್ತು. ಆ ಕೋಣೆಗಳು ಚಚ್ಚೌಕವಾಗಿದ್ದು
ಅದರ ಗೋಡೆಯು ಆರು ಮೊಳ ಉದ್ದವಾಗಿತ್ತು.

13ಅವನು ಆ ಕೋಣೆಯ ಹೊರಭಾಗದ ತುದಿಯಿಂದ
ಇನ್ನೊಂದು ಎದುರಿಗಿದ್ದ ಕೋಣೆಯ ಹೊರಭಾಗದ
ತುದಿಯ ತನಕ ಅಳತೆ ಮಾಡಿದಾಗ ಅದು ಇಪ್ಪತ್ತೈದು ಮೊಳ
ವಿತ್ತು. ಅದರ ಬಾಗಿಲುಗಳು ಎದುರು ಬದುರಾಗಿದ್ದವು.
14ಅವನು ಕೈಸಾಲೆಯ ಎರಡು ಬದಿಗಳ ಗೋಡೆಯನ್ನು
ಅಳತೆ ಮಾಡಿದಾಗ ಅದರ ಒಟ್ಟು ಅಳತೆ ಅರವತ್ತು ಮೊಳ
ದಷ್ಟಿತ್ತು. 15ಹೊರಗಿನ ಬಾಗಿಲಿನ ಒಳ ಭಾಗದ ತುದಿ
ಯಿಂದ ಹಿಡಿದು ಕೈಸಾಲೆಯ ಕೊನೆಯ ತುದಿಯ ತನಕ
ಐವತ್ತು ಮೊಳವಿತ್ತು. 16ಪ್ರತೀ ಕಾವಲು ಮನೆಯ
ಮೇಲ್ಗಡೆ ಸಣ್ಣ ಕಿಟಕಿಗಳು ಗೋಡೆ ಮತ್ತು ಜಗಲಿಗಳು
ಇದ್ದವು. ಕಿಟಕಿಯ ಅಗಲದ ಭಾಗವು ಪ್ರವೇಶದ್ವಾರಕ್ಕೆ
ಮುಖ ಮಾಡಿದ್ದವು. ಪ್ರವೇಶದ್ವಾರದ ಎರಡೂ ಪಕ್ಕ
ದಲ್ಲಿದ್ದ ಗೋಡೆಗಳ ಮೇಲೆ ಖರ್ಜೂರ ವೃಕ್ಷದ ಚಿತ್ರವನ್ನು
ಕೆತ್ತಲಾಗಿತ್ತು.

## ಹೊರಗಿನ ಪ್ರಾಕಾರ

17ಆಮೇಲೆ ಅವನು ನನ್ನನ್ನು ಹೊರಗಿನ ಪ್ರಾಕಾರಕ್ಕೆ
ಕರಕೊಂಡು ಹೋದನು. ಆ ಪ್ರಾಕಾರದ ಸುತ್ತಲೂ

---

**ಉದ್ದ ಅಳತೆ** ಅಕ್ಷರಶಃ, ''ಒಂದು ಮೊಳ ಮತ್ತು ಒಂದು ಕೈಹಿಡಿ ಉದ್ದ. ಈ ಮೊಳವು 20.67 ಇಂಚುಗಳಿಗೆ ಸಮವಾಗಿದೆ, ಅಥವಾ 52.5 ಸೆಂಟಿ ಮೀಟರ್‌ಗೆ ಸಮವಾಗಿದೆ.

**ಆರು ಮೊಳ** 10 ಅಡಿ, 4 ಇಂಚು ಅಥವಾ 3.15 ಮೀಟರ್.

ಮೂವತ್ತು ಕೋಣೆಗಳೂ, ನೆಲಗಟ್ಟು ಇದ್ದವು. ಆ ಕೋಣೆ
ಗಳು ಗೋಡೆಗೆ ತಾಗಿ ನೆಲಗಟ್ಟಿಗೆ ಮುಖ ಮಾಡಿದ್ದವು.
18ದ್ವಾರದ ಉದ್ದ ಅಳತೆಯಷ್ಟು ನೆಲಗಟ್ಟಿನ ಅಗಲದ
ಅಳತೆಯಾಗಿತ್ತು. ನೆಲಗಟ್ಟು ಪ್ರವೇಶ ದ್ವಾರದ ಒಳಗಿನ
ತುದಿಯ ತನಕವಿತ್ತು. ಇದು ಕೆಳಗಣ ನೆಲಗಟ್ಟಾಗಿತ್ತು.
19ಅವನು ಕೆಳಗಣ ಪ್ರವೇಶ ದ್ವಾರದ ಒಳಭಾಗದಿಂದ
ಹಿಡಿದು ಒಳಗಣ ಪ್ರಾಕಾರದ ಹೊರಭಾಗದ ತನಕ ಅಳತೆ
ಮಾಡಿದಾಗ ಅದು ನೂರು ಮೊಳ ಉದ್ದ ಪೂರ್ವ
ದಿಕ್ಕಿನಲ್ಲಿಯೂ, ಉತ್ತರದಿಕ್ಕಿನಲ್ಲಿಯೂ ಇತ್ತು.

20ಆಮೇಲೆ ಹೊರಗಿನ ಪ್ರಾಕಾರದ ಗೋಡೆಯಲ್ಲಿದ್ದ
ಉತ್ತರ ಪ್ರವೇಶದ್ವಾರದ ಉದ್ದಗಲವನ್ನು ಅವನು ಅಳತೆ
ಮಾಡಿದನು. 21ಈ ಪ್ರವೇಶದ್ವಾರ, ಅಕ್ಕಪಕ್ಕದಲ್ಲಿದ್ದ
ಮೂರು ಕೋಣೆಗಳು ಮತ್ತು ಅದರ ಕೈಸಾಲೆಗಳೆಲ್ಲವೂ
ಮೊದಲಿನ ಪ್ರವೇಶದ್ವಾರದಂತೆಯೇ ಅಳತೆಯುಳ್ಳವುಗ
ಳಾಗಿತ್ತು. ಪ್ರವೇಶ ದ್ವಾರವು ಐವತ್ತು ಮೊಳ ಉದ್ದ,
ಇಪ್ಪತ್ತೈದು ಮೊಳ ಅಗಲವಿತ್ತು. 22ಅದರ ಕಿಟಕಿಗಳು,
ಕೈಸಾಲೆ, ಖರ್ಜೂರ ವೃಕ್ಷದ ಕೆತ್ತನೆ ಕೆಲಸಗಳೆಲ್ಲವೂ
ಪೂರ್ವದ ಪ್ರವೇಶದ್ವಾರದಂತೆಯೇ ಇದ್ದವು. ಹೊರಗಿ
ನಿಂದ ಪ್ರವೇಶದ್ವಾರಕ್ಕೆ ಬರಲು ಏಳು ಮೆಟ್ಟಿಲುಗಳಿದ್ದವು.
ಅದರ ಕೈಸಾಲೆಯು ಪ್ರವೇಶದ್ವಾರದ ಒಳಭಾಗದ ಕೊನೆ
ಯಲ್ಲಿತ್ತು. 23ಪ್ರಾಕಾರದ ಹೊರಗೆ ಉತ್ತರದ ಪ್ರವೇಶ
ದ್ವಾರದಿಂದ ಒಳಗಿನ ಪ್ರಾಕಾರಕ್ಕೆ ಹೋಗಲು ದ್ವಾರವಿತ್ತು.
ಇದು ಪೂರ್ವದಲ್ಲಿದ್ದ ದ್ವಾರದಂತಿತ್ತು. ಅವನು ಒಳ
ಗೋಡೆಯ ದ್ವಾರದಿಂದ ಹೊರಗೋಡೆಯ ದ್ವಾರದ
ತನಕ ಅಳೆದಾಗ, ದ್ವಾರದಿಂದ ದ್ವಾರಕ್ಕೆ ನೂರು
ಮೊಳವಿತ್ತು.

24ಆಮೇಲೆ ಅವನು ದಕ್ಷಿಣದ ಗೋಡೆಗೆ ಕರೆದು
ಕೊಂಡು ಹೋದನು. ಅಲ್ಲಿ ಒಂದು ದ್ವಾರವಿರುವದನ್ನು
ಕಂಡೆನು. ಅವನು ಒಳಗಿನ ಗೋಡೆಗಳನ್ನೂ ಕೈಸಾಲೆ
ಯನ್ನೂ ಅಳತೆಮಾಡಿದನು.ಅದರ ಅಳತೆ ಬೇರೆ ಪ್ರವೇಶ
ದ್ವಾರಗಳಂತೆ ಇದ್ದವು.

25ಅದರಲ್ಲಿಯೂ ಅದರ ಕೈಸಾಲೆಯಲ್ಲಿಯೂ ಎಲ್ಲಾ
ಕಡೆ ಅಂಥ ಕಿಟಕಿಗಳೇ ಇದ್ದವು. ಆ ಪ್ರವೇಶದ್ವಾರವು
ಐವತ್ತು ಮೊಳ ಉದ್ದ ಮತ್ತು ಇಪ್ಪತ್ತೈದು ಮೊಳ ಅಗಲ
ವಾಗಿತ್ತು. 26ಅದರ ಮೇಲೆ ಏರಲು ಏಳು ಮೆಟ್ಟಲು
ಗಳಿದ್ದವು. ಅದರ ಕೈಸಾಲೆಯು ದ್ವಾರದ ಒಳಗಿನ ಭಾಗ
ದಲ್ಲಿತ್ತು. ಅದರ ಅಕ್ಕಪಕ್ಕದ ಗೋಡೆಗಳಲ್ಲಿ ಖರ್ಜೂರ
ವೃಕ್ಷದ ಕೆತ್ತನೆ ಕೆಲಸವಿತ್ತು.

27ಒಳಗಿನ ಪ್ರಾಕಾರದ ದಕ್ಷಿಣದಲ್ಲಿ ಒಂದು ದ್ವಾರ
ವಿತ್ತು. ಅವನು ಒಳಗಿನ ಪ್ರಾಕಾರದ ದ್ವಾರದಿಂದ ಹೊರ
ಗಿನ ಪ್ರಾಕಾರದ ದ್ವಾರದ ತನಕ ಅಳತೆ ಮಾಡಿದನು. ದ್ವಾರ
ದಿಂದ ದ್ವಾರಕ್ಕೆ ನೂರು ಮೊಳವಿತ್ತು.

## ಒಳಗಿನ ಪ್ರಾಕಾರ

28ಆ ಮೇಲೆ ಅವನು ದಕ್ಷಿಣದ ದ್ವಾರದಿಂದ ಒಳಗಿನ
ಪ್ರಾಕಾರಕ್ಕೆ ಕರೆದುಕೊಂಡು ಹೋದನು. ಈ ಪ್ರವೇಶ
ದ್ವಾರವನ್ನು ಅಳತೆ ಮಾಡಿದನು. ಇದು ಕೂಡಾ ಒಳಗಿನ
ಪ್ರಾಕಾರದ ಬೇರೆ ದ್ವಾರಗಳಂತೆಯೇ ಉದ್ದಗಲವಿತ್ತು.
29ಅದರ ಕೋಣೆಗಳು, ಅಕ್ಕಪಕ್ಕದ ಗೋಡೆಗಳು, ಕೈಸಾಲೆ
ಎಲ್ಲವೂ ಬೇರೆ ಪ್ರವೇಶದ್ವಾರಗಳ ಪ್ರಕಾರವೇ ಅಳತೆ
ಯಲ್ಲಿದ್ದವು. ದ್ವಾರದ ಸುತ್ತಲೂ ಕಿಟಕಿಗಳಿದ್ದವು. ಆ
ದ್ವಾರವು ಐವತ್ತು ಮೊಳ ಉದ್ದ ಇಪ್ಪತ್ತೈದು ಮೊಳ ಅಗಲ
ವಿತ್ತು. 30ಕೈಸಾಲೆಯು ಇಪ್ಪತ್ತೈದು ಮೊಳ ಅಗಲ ಐವತ್ತು
ಮೊಳ ಉದ್ದವಾಗಿತ್ತು. 31ಹೊರಗಿನ ಪ್ರಾಕಾರದ ಪಕ್ಕದ
ಲ್ಲಿರುವ ಪ್ರವೇಶ ದ್ವಾರದ ಕೊನೆಯಲ್ಲಿ ಕೈಸಾಲೆಯಿತ್ತು.
ಖರ್ಜೂರ ವೃಕ್ಷದ ಕೆತ್ತನೆ ಕೆಲಸವು ಅದರ ಗೋಡೆಯ
ಮೇಲಿತ್ತು. ಆ ಪ್ರವೇಶ ದ್ವಾರವನ್ನು ಏರಲು ಎಂಟು
ಮೆಟ್ಟಲುಗಳಿದ್ದವು.

32ಅನಂತರ ಅವನು ಪೂರ್ವದಲ್ಲಿದ್ದ ಒಳಗಿನ ಪ್ರಾಕಾ
ರಕ್ಕೆ ಕರೆದುಕೊಂಡು ಹೋದನು. ಅಲ್ಲಿದ್ದ ಪ್ರವೇಶ
ದ್ವಾರವನ್ನು ಅಳತೆ ಮಾಡಿದನು. ಬೇರೆ ದ್ವಾರಗಳ ರೀತಿ
ಯಲ್ಲಿ ಅದರ ಉದ್ದಳತೆಯಿತ್ತು. 33ಆದರ ಕೋಣೆಗಳು,
ಗೋಡೆ, ಕೈಸಾಲೆ ಎಲ್ಲವೂ ಬೇರೆ ಪ್ರವೇಶದ್ವಾರದ
ಅಳತೆಯಂತೆ ಇದ್ದವು. ದ್ವಾರದ ಸುತ್ತಲೂ ಕೈಸಾಲೆಯ
ಮೇಲೂ ಕಿಟಕಿಗಳಿದ್ದವು. ಆ ಪ್ರವೇಶದ್ವಾರವು ಐವತ್ತು
ಮೊಳ ಉದ್ದ ಇಪ್ಪತ್ತೈದು ಮೊಳ ಅಗಲವಿತ್ತು. 34ಅದರ
ಕೈಸಾಲೆ ಹೊರ ಪ್ರಾಕಾರದ ಪಕ್ಕದಲ್ಲಿ ಪ್ರವೇಶ ದ್ವಾರದ
ಕೊನೆಯಲ್ಲಿತ್ತು. ದ್ವಾರದ ಎರಡು ಪಕ್ಕಗಳ ಗೋಡೆಗಳಲ್ಲಿ
ಖರ್ಜೂರ ವೃಕ್ಷದ ಕೆತ್ತನೆ ಕೆಲಸವಿತ್ತು. ಆ ದ್ವಾರಕ್ಕೇರಲು
ಎಂಟು ಮೆಟ್ಟಲುಗಳಿದ್ದವು.

35ಆ ಮೇಲೆ ಅವನು ನನ್ನನ್ನು ಉತ್ತರದ ಪ್ರವೇಶ
ದ್ವಾರಕ್ಕೆ ಕರೆದುಕೊಂಡು ಹೋದನು. ಆವನು ಅದನ್ನು
ಆಳತೆ ಮಾಡಿದನು. ಬೇರೆ ದ್ವಾರಗಳಂತೆಯೇ ಅದರ ಅಳತೆ
ಯಿತ್ತು. 36ಅದರ ಕೋಣೆಗಳು, ಗೋಡೆಗಳು, ಮತ್ತು
ಕೈಸಾಲೆ ಇವೆಲ್ಲವೂ ಬೇರೆ ದ್ವಾರದ ಅಳತೆಯಂತಿತ್ತು.
ದ್ವಾರದ ಸುತ್ತಲೂ ಕಿಟಕಿಗಳಿದ್ದವು. ದ್ವಾರವು ಐವತ್ತು
ಮೊಳ ಉದ್ದ, ಇಪ್ಪತ್ತೈದು ಮೊಳ ಆಗಲವಿತ್ತು.
37ಕೈಸಾಲೆಯು ಹೊರ ಪ್ರಾಕಾರದಲ್ಲಿಯ ದ್ವಾರದ ಕೊನೆ
ಯಲ್ಲಿತ್ತು. ಖರ್ಜೂರ ವೃಕ್ಷದ ಚಿತ್ರವು ಗೋಡೆಗಳ
ಎರಡೂ ಕಡೆಯ ಮೇಲೆ ಕೆತ್ತಲ್ಪಟ್ಟಿತ್ತು. ದ್ವಾರವನ್ನು
ಮುಟ್ಟಲು ಎಂಟು ಮೆಟ್ಟಿಲುಗಳಿದ್ದವು.

## ಯಜ್ಞವನ್ನು ತಯಾರು ಮಾಡುವ ಕೋಣೆಗಳು

38ಈ ದ್ವಾರದ ಕೈಸಾಲೆಗೆ ಮುಖಮಾಡಿ ಬಾಗಿಲಿದ್ದ
ಒಂದು ಕೋಣೆಯಿತ್ತು. ಇದು ಯಾಜಕರು ಸರ್ವಾಂಗ

ಹೋಮದ ಪ್ರಾಣಿಗಳನ್ನು ತೊಳೆಯುವ ಸ್ಥಳವಾಗಿತ್ತು.
[39]ಬಾಗಿಲಿನ ಅಕ್ಕಪಕ್ಕದಲ್ಲಿ ಎರಡು ಮೇಜುಗಳಿದ್ದವು.
ಸರ್ವಾಂಗಹೋಮ, ದೋಷಪರಿಹಾರಕ ಯಜ್ಞ, ಪಾಪ
ಪರಿಹಾರಕ ಯಜ್ಞಗಳಿಗೆ ಅರ್ಪಿಸುವ ಪ್ರಾಣಿಗಳನ್ನು ಈ
ಮೇಜುಗಳ ಮೇಲೆ ಕೊಲ್ಲುತ್ತಿದ್ದರು. [40]ಈ ಕೈಸಾಲೆಯ
ಬಾಗಿಲಿನ ಹೊರಗಿನ ಗೋಡೆಯ ಬದಿಯಲ್ಲಿಯೂ
ಎರಡು ಮೇಜುಗಳಿದ್ದವು. [41]ಹೀಗೆ ಒಳಭಾಗದ ಗೋಡೆ
ಯಲ್ಲಿ ನಾಲ್ಕು ಮೇಜುಗಳೂ ಹೊರಭಾಗದ ಗೋಡೆಯ
ಬದಿಯಲ್ಲಿ ನಾಲ್ಕು ಮೇಜುಗಳೂ ಇದ್ದವು. ಹೀಗೆ ಯಾಜ
ಕರು ಎಂಟು ಮೇಜುಗಳಲ್ಲಿ ಯಜ್ಞದ ಪಶುಗಳನ್ನು
ಸಿದ್ಧಪಡಿಸುತ್ತಿದ್ದರು. [42]ಸರ್ವಾಂಗ ಹೋಮಕ್ಕಾಗಿ ಕಲ್ಲಿ
ನಿಂದ ಮಾಡಿದ ನಾಲ್ಕು ಮೇಜುಗಳಿದ್ದವು. ಈ ಮೇಜು
ಗಳು ಒಂದೂವರೆ ಮೊಳ ಉದ್ದ, ಒಂದೂವರೆ ಮೊಳ
ಅಗಲ, ಒಂದು ಮೊಳ ಎತ್ತರ. ಈ ಮೇಜುಗಳ ಮೇಲೆ
ಪಶುಗಳನ್ನು ವಧಿಸಲು ಉಪಯೋಗಿಸುವ ಉಪಕರಣ
ಗಳನ್ನು ಯಾಜಕರು ಇಡುತ್ತಿದ್ದರು. [43]ಈ ಸ್ಥಳದ ಗೋಡೆ
ಯಲ್ಲಿ ಸುತ್ತಲೂ ಮೂರು ಇಂಚು ಉದ್ದದ ಮಾಂಸವನ್ನು
ಸಿಕ್ಕಿಸುವ ಗಾಳಗಳಿದ್ದವು. ಯಜ್ಞದ ಮಾಂಸವು ಈ
ಮೇಜುಗಳ ಮೇಲಿತ್ತು.

### ಯಾಜಕರ ಕೋಣೆಗಳು

[44]ಒಳಗಿನ ಪ್ರಾಕಾರದಲ್ಲಿ ಎರಡು ಕೋಣೆಗಳಿದ್ದವು.
ಒಂದು ಉತ್ತರದ ದ್ವಾರದ ಬಳಿಯಲ್ಲಿ ದಕ್ಷಿಣಕ್ಕೆ
ಅಭಿಮುಖವಾಗಿತ್ತು. ಇನ್ನೊಂದು ದಕ್ಷಿಣದ ದ್ವಾರದ
ಬಳಿಯಲ್ಲಿದ್ದು ಉತ್ತರಕ್ಕೆ ಅಭಿಮುಖವಾಗಿತ್ತು. [45]ಅವನು,
‘‘ದಕ್ಷಿಣಕ್ಕೆ ಅಭಿಮುಖವಾಗಿದ್ದ ಕೋಣೆಯು, ಆಲಯ
ದಲ್ಲಿ ಯಾಜಕೋದ್ಯೋಗ ಮಾಡುತ್ತಿರುವ ಯಾಜಕರಿ
ಗಾಗಿ. [46]ಆದರೆ ಉತ್ತರಕ್ಕೆ ಅಭಿಮುಖವಾಗಿರುವ
ಕೋಣೆಯು ಯಜ್ಞವೇದಿಯಲ್ಲಿ ಕಾರ್ಯವಹಿಸುತ್ತಿರುವ
ಯಾಜಕರಿಗಾಗಿ ಯಾಜಕರೆಲ್ಲರೂ ಲೇವಿ ವಂಶದವ
ರಾಗಿದ್ದಾರೆ. ಎರಡನೇ ಗುಂಪಿನ ಯಾಜಕರು ಚಾದೋ
ಕನ ಸಂತತಿಯವರಾಗಿದ್ದರು. ಅವರು ಮಾತ್ರವೇ ಯಜ್ಞ
ವೇದಿಯಲ್ಲಿ ಯಜ್ಞಾರ್ಪಣೆ ಮಾಡಬಹುದು’’ ಎಂದು
ಹೇಳಿದನು. [47]ಅವನು ಒಳಗಿನ ಪ್ರಾಕಾರವನ್ನು ಅಳತೆ
ಮಾಡಿದನು. ಅದು ಚಚ್ಚೌಕವಾಗಿದ್ದು ನೂರು ಮೊಳ
ಉದ್ದ, ನೂರು ಮೊಳ ಅಗಲವಿತ್ತು. ಈ ಯಜ್ಞವೇದಿಯು
ಆಲಯದ ಮುಂಭಾಗದಲ್ಲಿತ್ತು.

### ಆಲಯದ ಕೈಸಾಲೆ

[48]ಆಮೇಲೆ ಅವನು ಆಲಯದ ಕೈಸಾಲೆಗೆ ನನ್ನನ್ನು
ಕರೆದುಕೊಂಡು ಹೋದನು. ಅದರ ಇಕ್ಕೆಡೆಗಳಲ್ಲಿಯೂ
ಇರುವ ಗೋಡೆಗಳನ್ನು ಅವನು ಅಳತೆ ಮಾಡಲಾಗಿ
ಗೋಡೆಯು ಐದು ಮೊಳ ದಪ್ಪ, ಮೂರು ಮೊಳ ಅಗಲ
ವಾಗಿತ್ತು. ಅದರ ಮಧ್ಯದ ಸ್ಥಳ ಹದಿನಾಲ್ಕು ಮೊಳವಿತ್ತು.
[49]ಕೈಸಾಲೆಯು ಇಪ್ಪತ್ತು ಮೊಳ ಅಗಲ ಮತ್ತು ಹನ್ನೆರಡು
ಮೊಳ ಉದ್ದವಾಗಿತ್ತು. ಆ ಕೈಸಾಲೆಯನ್ನು ಹತ್ತಲು ಹತ್ತು
ಮೆಟ್ಟಲುಗಳಿದ್ದವು. ಕೈಸಾಲೆಯ ಇಕ್ಕೆಡೆಗಳಲ್ಲಿಯೂ
ಗೋಡೆಗಳಿಗೆ ಸ್ತಂಭಗಳಿದ್ದವು.

### ಆಲಯದ ಪವಿತ್ರಸ್ಥಳ

41 ಆಮೇಲೆ ಅವನು ನನ್ನನ್ನು ಪವಿತ್ರ ಸ್ಥಳಕ್ಕೆ ಕರೆದು
ಕೊಂಡು ಹೋದನು. ಅದರ ಇಕ್ಕೆಡೆಗಳಲ್ಲಿರುವ
ಗೋಡೆಯನ್ನು ಅವನು ಅಳತೆ ಮಾಡಿದನು. ಆ ಗೋಡೆ
ಗಳು ಆರು ಮೊಳ ದಪ್ಪವಾಗಿದ್ದವು [2]ಅದರ ಬಾಗಿಲು ಹತ್ತು
ಮೊಳ ಅಗಲವಾಗಿದ್ದು ಅದರ ಎರಡು ಬದಿಯೂ ಐದೈದು
ಮೊಳವಿದ್ದವು. ಅವನು ಆ ಕೋಣೆಯ ಅಳತೆ ತೆಗೆದನು.
ಅದು ನಾಲ್ವತ್ತು ಮೊಳ ಉದ್ದ ಇಪ್ಪತ್ತು ಮೊಳ ಅಗಲವಿತ್ತು.

### ಆಲಯದ ಮಹಾ ಪವಿತ್ರ ಸ್ಥಳ

[3]ಆಮೇಲೆ ಅವನು ಕೊನೆಯ ಕೋಣೆಗೆ ಪ್ರವೇಶಿ
ಸಿದನು. ಅದರ ಬಾಗಿಲಿನ ಇಕ್ಕೆಡೆಗಳಲ್ಲಿರುವ ಗೋಡೆ
ಗಳನ್ನು ಅವನು ಅಳತೆ ಮಾಡಿದನು. ಆ ಗೋಡೆಗಳು
ಎರಡು ಮೊಳ ದಪ್ಪವಾಗಿದ್ದು ಏಳು ಮೊಳ ಅಗಲ
ವಾಗಿದ್ದವು. ದ್ವಾರವು ಆರು ಮೊಳ ಅಗಲವಾಗಿತ್ತು.
[4]ಆಮೇಲೆ ಆ ಪುರುಷನು ಕೋಣೆಯ ಉದ್ದವನ್ನು ಅಳತೆ
ಮಾಡಿದನು. ಅದು ಇಪ್ಪತ್ತು ಮೊಳ ಉದ್ದ, ಇಪ್ಪತ್ತು ಮೊಳ
ಅಗಲವಾಗಿತ್ತು. ‘ಇದು ಮಹಾ ಪವಿತ್ರ ಸ್ಥಳ’ ಎಂದು
ಅವನು ನನಗೆ ತಿಳಿಸಿದನು.

### ಆಲಯದ ಸುತ್ತಲಿದ್ದ ಇತರ ಕೋಣೆಗಳು

[5]ಆಮೇಲೆ ಆ ಮನುಷ್ಯನು ಆಲಯದ ಗೋಡೆಯನ್ನು
ಅಳತೆ ಮಾಡಿದನು. ಅದು ಆರು ಮೊಳ ದಪ್ಪವಾಗಿತ್ತು.
ಆಲಯದ ಸುತ್ತಲೂ ಕೋಣೆಗಳಿದ್ದವು. ಅವು ನಾಲ್ಕು
ಮೊಳ ಅಗಲವಾಗಿದ್ದವು. [6]ಆ ಕೋಣೆಗಳು ಒಂದರ
ಮೇಲೊಂದು ಮೂರು ಅಂತಸ್ತಿನಲ್ಲಿದ್ದವು. ಪ್ರತೀ
ಅಂತಸ್ತಿನಲ್ಲಿ ಮೂವತ್ತು ಕೊಠಡಿಗಳಿದ್ದವು. ಆಲಯದ
ಗೋಡೆಯು ಮೆಟ್ಟಲು ಮೆಟ್ಟಲುಗಳಾಗಿ ಕಟ್ಟಲ್ಪಟ್ಟಿತ್ತು.
ಪಕ್ಕದ ಕೋಣೆಗಳು ಈ ಮೆಟ್ಟಲುಗಳ ಮೇಲೆ ಆಧಾರ
ಗೊಂಡಿದ್ದವು. ಅವು ಆಲಯದ ಗೋಡೆಯನ್ನು ಆಧಾರ
ಮಾಡಿಕೊಂಡಿರಲಿಲ್ಲ. [7]ಪ್ರತೀ ಅಂತಸ್ತು ಅದರ ಕೆಳಗಿನ
ಅಂತಸ್ತಿಗಿಂತ ಅಗಲವಾಗಿದ್ದವು. ಆಲಯದ ಸುತ್ತ ಇದ್ದ
ಕೋಣೆಗಳ ಗೋಡೆಗಳು ಮೇಲಕ್ಕೆ ಹೋದಂತೆ ಸಪೂರ
ವಾಗಿದ್ದವು. ಹೀಗೆ ಕೊನೇ ಅಂತಸ್ತಿನ ಕೋಣೆಗಳು ಕೆಳಗಣ
ಕೋಣೆಗಳಿಗಿಂತ ಹೆಚ್ಚು ಅಗಲವಾಗಿದ್ದವು. ಮಧ್ಯ

ಅಂತಸ್ತಿನ ಮೂಲಕ ಒಂದು ನಿಚ್ಚಣಿಕೆಯು ಕೆಳಗಿನ ಅಂತಸ್ತಿನಿಂದ ಕೊನೆಯ ಅಂತಸ್ತಿನವರೆಗೆ ಹೋಗಿತ್ತು.

8ಆಲಯದ ಸುತ್ತಲೂ ಒಂದು ಜಗಲಿ ಇರುವದನ್ನು ನಾನು ಕಂಡೆನು. ಇದು ಪಕ್ಕದ ಕೋಣೆಗಳಿಗೆ ಅಸ್ತಿವಾರ ವಾಗಿತ್ತು. ಇದು ಒಂದು ಅಳತೆ ಕೋಲಿನಷ್ಟು ಎತ್ತರ ವಾಗಿತ್ತು. 9ಆ ಕೋಣೆಗಳ ಹೊರಗಣ ಗೋಡೆಯು ಐದು ಮೊಳ ದಪ್ಪವಾಗಿತ್ತು. 10ಆಲಯದ ಉದ್ದಕ್ಕೂ ಇದ್ದ ಆ ಕೋಣೆಗಳಿಗೂ ನಡುವೆ ಆಲಯದ ಸುತ್ತಲೂ ಇಪ್ಪತ್ತು ಮೊಳ ಅಂತರವಿತ್ತು. 11ಆ ಕೋಣೆಗಳ ಬಾಗಿಲುಗಳು ಜಗಲಿಯ ಕಡೆಗೆ ಮುಖಮಾಡಿದ್ದವು. ಅವಕ್ಕೆ ಒಂದು ಬಾಗಿಲು ಉತ್ತರದ ಕಡೆಯಿಂದಲೂ ಇನ್ನೊಂದು ಬಾಗಿಲು ದಕ್ಷಿಣ ಕಡೆಯಿಂದಲೂ ಇದ್ದವು. ಆ ಎತ್ತರದ ಜಗಲಿಯು ಸುತ್ತಲೂ ಐದು ಮೊಳ ಅಗಲವಿತ್ತು.

12ಆಲಯದ ಪಶ್ಚಿಮ ಭಾಗದ ಕಿರಿದಾದ ಸ್ಥಳದಲ್ಲಿ ಒಂದು ಕಟ್ಟಡವಿತ್ತು. ಇದು ಎಪ್ಪತ್ತು ಮೊಳ ಅಗಲ ವಾಗಿದ್ದು ತೊಂಬತ್ತು ಮೊಳ ಉದ್ದವಾಗಿತ್ತು. ಅದರ ಸುತ್ತಲಿನ ಗೋಡೆಯು ಐದು ಮೊಳ ದಪ್ಪವಾಗಿತ್ತು. 13ಅವನು ಆಲಯದ ಅಳತೆ ತೆಗೆದನು. ಆಲಯವು ನೂರು ಮೊಳ ಉದ್ದವಾಗಿತ್ತು. ಕಿರಿದಾದ ಸ್ಥಳ, ಅದರ ಕಟ್ಟಡ ಮತ್ತು ಗೋಡೆಯ ಸಹಿತ ನೂರು ಮೊಳ ಉದ್ದವಾಗಿತ್ತು. 14ಪೂರ್ವದಿಕ್ಕಿನಲ್ಲಿದ್ದ ಕಿರಿದಾದ ಸ್ಥಳವೂ ನೂರು ಮೊಳ ಉದ್ದವಿತ್ತು.

15ಆಲಯದ ಹಿಂಬಾಗದಲ್ಲಿದ್ದ ಕಿರಿದಾದ ಸ್ಥಳದಲ್ಲಿ ಕಟ್ಟಿದ್ದ ಕಟ್ಟಡದ ಉದ್ದವನ್ನು ಅವನು ಲೆಕ್ಕ ಮಾಡಿದನು. ಅದು ಗೋಡೆಯಿಂದ ಗೋಡೆಗೆ ನೂರು ಮೊಳವಿತ್ತು.

ಪವಿತ್ರ ಸ್ಥಳ, ಮಹಾ ಪವಿತ್ರ ಸ್ಥಳ ಮತ್ತು ಒಳಗಿನ ಪ್ರಾಕಾರಕ್ಕೆ ಮುಖಮಾಡಿದ್ದ ಕೈಸಾಲೆಯ 16ಗೋಡೆಗಳಿಗೆ ಮರದ ಹಲಗೆಗಳು ಹೊದಿಸಲ್ಪಟ್ಟಿದ್ದವು. ಎಲ್ಲಾ ಕಿಟಕಿ ಬಾಗಿಲುಗಳಿಗೆ ಮರದ ಹೊದಿಕೆಯಿತ್ತು. ದ್ವಾರದ ಪಕ್ಕ ದಲ್ಲಿ ಆಲಯದ ಗೋಡೆಗೆ ನೆಲದಿಂದ ಹಿಡಿದು ಕಿಟಕಿಯ ತನಕ ಮರದ ಹಲಗೆಯ ಹೊದಿಕೆ ಇತ್ತು.

17ಬಾಗಿಲಿನ ಮೇಲೆಯೂ ಒಳಗಿನ ಮತ್ತು ಹೊರಗಿನ ಕೋಣೆಗಳ ಗೋಡೆಗಳಲ್ಲಿ

18ಕೆರೂಬಿದೂತರ ಮತ್ತು ಖರ್ಜೂರ ವೃಕ್ಷಗಳ ಚಿತ್ರ ಬಿಡಿಸಲ್ಪಟ್ಟಿತ್ತು. ಎರಡು ಕೆರೂಬಿ ದೂತರ ನಡುವೆ ಒಂದು ಖರ್ಜೂರ ವೃಕ್ಷವಿತ್ತು. ಪ್ರತಿ ಕೆರೂಬಿ ದೂತರಿಗೆ ಎರಡು ಮುಖಗಳಿದ್ದವು. 19ಒಂದು ಮುಖ ಮನುಷ್ಯನ ಮುಖ ದಂತಿದ್ದು ಖರ್ಜೂರ ವೃಕ್ಷವನ್ನು ದಿಟ್ಟಿಸುತ್ತಿತ್ತು. ಇನ್ನೊಂದು ಮುಖವು ಸಿಂಹದ ಮುಖದಂತಿದ್ದು ಆಚೆ ಪಕ್ಕದ ಖರ್ಜೂರ ವೃಕ್ಷವನ್ನು ನೋಡುವಂತಿತ್ತು. ಆಲಯದ ಸುತ್ತಲೂ ಈ ರೀತಿಯ ಕೆತ್ತನೆ ಕೆಲಸವಿತ್ತು. 20ಪವಿತ್ರ ಸ್ಥಾನದ ಗೋಡೆಗಳಲ್ಲಿ ನೆಲ ದಿಂದ ಬಾಗಿಲ ವರೆಗೆ ಕೆರೂಬಿ ದೂತರು ಮತ್ತು ಖರ್ಜೂರ ವೃಕ್ಷದ ಕೆತ್ತನೆ ಕೆಲಸವನ್ನು ಮಾಡಿದ್ದರು.

21ಪವಿತ್ರ ಸ್ಥಾನದ ಇಕ್ಕೆಡೆಗಳಲ್ಲಿದ್ದ ಗೋಡೆಗಳು ಚೌಕ ವಾಗಿದ್ದವು. ಮಹಾ ಪವಿತ್ರ ಸ್ಥಳದೆದುರು ಮರದಿಂದ ತಯಾರಿಸಿದ ವೇದಿಯಂತೆ ಕಾಣುತ್ತಿದ್ದ 22ಒಂದು ವಸ್ತು ಇತ್ತು. ಅದು ಮೂರು ಮೊಳ ಎತ್ತರ, ಎರಡು ಮೊಳ ಉದ್ದ ವಿತ್ತು. ಅದರ ಮೂಲೆಗಳು, ಅದರ ಚೌಕಟ್ಟು ಮತ್ತು ಬದಿಗಳೆಲ್ಲಾ ಮರದಿಂದ ಮಾಡಿದ್ದವುಗಳಾಗಿದ್ದವು. ‘‘ಈ ಮೇಜು ಯೆಹೋವನ ಸನ್ನಿಧಾನದಲ್ಲಿದೆ’’ ಎಂದು ಆ ಮನುಷ್ಯನು ನನಗೆ ಹೇಳಿದನು.

23ಪವಿತ್ರ ಸ್ಥಳ ಮತ್ತು ಮಹಾ ಪವಿತ್ರ ಸ್ಥಳಗಳಿಗೆ ಎರಡೆ ರಡು ಬಾಗಿಲುಗಳಿದ್ದವು. 24ಒಂದೊಂದು ಬಾಗಿಲು ಗಳಿಗೆ ಎರಡೆರಡು ಮಡಚುವ ಕದಗಳಿದ್ದವು. 25ಅವುಗಳ ಮೇಲೆ ಕೆರೂಬಿದೂತರ ಮತ್ತು ಖರ್ಜೂರ ವಕ್ಷದ ಚಿತ್ರ ಗಳನ್ನು ಕೆತ್ತಲಾಗಿತ್ತು. ಗೋಡೆಗಳಲ್ಲಿ ಹೇಗೆ ಕೆತ್ತಲ್ಪ ಟ್ಟಿತ್ತೋ ಅದೇ ರೀತಿಯಲ್ಲಿ, ಕೈಸಾಲೆಯ ಮುಂದೆ ಒಂದು ಮರದಿಂದ ಮಾಡಿದ ಸೂರು ಇತ್ತು. 26ಇದಕ್ಕೆ ತೆರೆಯ ಲಾಗದ ಕಿಟಕಿಗಳಿದ್ದವು. ಇದರ ಗೋಡೆಗಳಲ್ಲಿಯೂ ಗೋಡೆಯ ಮೇಲಿದ್ದ ಸೂರು ಮತ್ತು ಆಲಯದ ಸುತ್ತಲಿದ್ದ ಕೋಣೆಯ ಗೋಡೆಗಳಲ್ಲಿ ಕೆರೂಬಿದೂತರು ಮತ್ತು ಖರ್ಜೂರ ವೃಕ್ಷದ ಕೆತ್ತನೆ ಕೆಲಸವಿತ್ತು.

### ಯಾಜಕರ ಕೋಣೆಗಳು

42 ಆಮೇಲೆ ಆ ಮನುಷ್ಯನು ನನ್ನನ್ನು ಉತ್ತರದ ದ್ವಾರದ ಮೂಲಕ ಹೊರಗಿನ ಪ್ರಾಕಾರಕ್ಕೆ ಕರೆದುಕೊಂಡು ಹೋದನು. ಅವನು ನನ್ನನ್ನು ಪಶ್ಚಿಮದಲ್ಲಿರುವ ಅನೇಕ ಕೋಣೆಗಳಿದ್ದ ಕಟ್ಟಡಕ್ಕೆ ಕರೆದು ಕೊಂಡು ಹೋದನು. ಅದು ಇಕ್ಕಟ್ಟಾದ ಸ್ಥಳದ ಪಶ್ಚಿಮ ದಲ್ಲಿತ್ತು ಮತ್ತು ಕಟ್ಟಡವು ಉತ್ತರ ಭಾಗದಲ್ಲಿತ್ತು. 2ಈ ಕಟ್ಟಡವು ನೂರು ಮೊಳ ಉದ್ದವಾಗಿದ್ದು ಐವತ್ತು ಮೊಳ ಅಗಲವಿತ್ತು. ಉತ್ತರ ಭಾಗದ ಪ್ರಾಕಾರದೊಳಗಿಂದ ಜನರು ಒಳಪ್ರವೇಶಿಸುತ್ತಿದ್ದರು. 3ಆ ಕಟ್ಟಡವು ಮೂರು ಅಂತಸ್ತಿನಷ್ಟು ಎತ್ತರವಿದ್ದು ಅದಕ್ಕೆ ಅನೇಕ ಮೇಲಂತ ಸ್ತುಗಳಿದ್ದವು. ಇಪ್ಪತ್ತು ಮೊಳದ ಒಳಗಿನ ಪ್ರಾಕಾರವು ಆಲಯಕ್ಕೂ ಕಟ್ಟಡಕ್ಕೂ ನಡುವೆ ಇತ್ತು. ಎದುರಿನ ಕೋಣೆ ಗಳು ಹೊರಗಣ ಪ್ರಾಕಾರದ ನೆಲಗಟ್ಟಿಗೆ ಮುಖಮಾಡಿ ದ್ದವು. 4ಇದರ ಪ್ರವೇಶ ದ್ವಾರವು ಉತ್ತರ ದಿಕ್ಕಿನಲ್ಲಿ ದ್ದಾಗ್ಯೂ, ಹತ್ತು ಮೊಳ ಅಗಲ, ನೂರು ಮೊಳ ಉದ್ದದ ದಾರಿಯು ಆ ಕಟ್ಟಡದ ದಕ್ಷಿಣ ಭಾಗದಲ್ಲಿತ್ತು. 5-6ಈ ಕಟ್ಟ ಡವು ಮೂರು ಅಂತಸ್ತು ಎತ್ತರವಿದ್ದಾಗ್ಯೂ ಇದಕ್ಕೆ ಹೊರ ಗಣ ಪ್ರಾಕಾರಕ್ಕೆ ಇದ್ದಂತೆ ಸ್ತಂಭಗಳಿರಲಿಲ್ಲ. ಮೇಲಿನ ಅಂತಸ್ತಿನ ಕೋಣೆಗಳು, ಮಧ್ಯ ಮತ್ತು ಕೆಳಗಿನ

ಅಂತಸ್ತುಗಳ ಕೋಣೆಗಳಿಂದ ಹಿಂದಕ್ಕೆ ಇದ್ದವು.
ಮೇಲಿನಂತಸ್ತು ಮಧ್ಯ ಅಂತಸ್ತಿಗಿಂತ ಕಿರಿದಾಗಿತ್ತು. ಮತ್ತು
ಮಧ್ಯ ಅಂತಸ್ತು ಕೆಳಗಿನ ಮನೆಗಿಂತ ಅಗಲದಲ್ಲಿ ಕಿರಿ
ದಾಗಿತ್ತು. ಯಾಕೆಂದರೆ ಮೇಲಂತಸ್ತುಗಳು ಆ ಜಾಗವನ್ನು
ಆಕ್ರಮಿಸಿದ್ದವು. 7ಕೋಣೆಗಳ ಉದ್ದಕ್ಕೆ ಅನುಸಾರವಾಗಿ
ಒಂದು ಗೋಡೆಯು ಹೊರಗಿನ ಪ್ರಾಕಾರಕ್ಕೆ ಸಮವಾಗಿ
ಇತ್ತು. ಇದು ಕೋಣೆಗಳೆದುರು ಐವತ್ತು ಮೊಳ ಉದ್ದಕ್ಕೆ
ಇತ್ತು. 8ಹೊರಗಿನ ಪ್ರಾಕಾರಕ್ಕೆ ಸರಿಯಾಗಿ ಹೋಗಿದ್ದ
ಕೋಣೆಗಳ ಸಾಲು ಐವತ್ತು ಮೊಳ ಉದ್ದವಾಗಿತ್ತು. ಆದರೆ
ಆಲಯದ ಬಳಿಯಲ್ಲಿದ್ದ ಕಟ್ಟಡವು ನೂರು ಮೊಳ
ಉದ್ದವಾಗಿತ್ತು. 9ಕಟ್ಟಡದ ಪೂರ್ವಭಾಗದಲ್ಲಿ ಪ್ರವೇಶ
ದ್ವಾರವು ಇತ್ತು. ಇದರ ಮೂಲಕ ಹೊರಗಣ ಪ್ರಾಕಾರ
ದಿಂದ ಜನರು ಒಳ ಪ್ರವೇಶ ಮಾಡಬಹುದು. 10ಈ
ಪ್ರವೇಶ ದ್ವಾರವು ಪ್ರಾಕಾರದ ಬದಿಯಲ್ಲಿ ಗೋಡೆಯು
ಪ್ರಾರಂಭ ವಾಗುವಲ್ಲಿಯೇ ಇತ್ತು.

ಬೇರೆ ಕಟ್ಟಡ ಮತ್ತು ಕಿರಿದಾದ ಜಾಗಕ್ಕೆ ತಾಗಿ
ದಕ್ಷಿಣದಿಕ್ಕಿನಲ್ಲಿ ಕೋಣೆಗಳು ಇದ್ದವು. 11ಈ ಕೋಣೆಗಳ
ಎದುರಿನಲ್ಲಿ ದಾರಿಯು ಇತ್ತು. ಇದು ಉತ್ತರ ದಿಕ್ಕಿನಲ್ಲಿದ್ದ
ಕೋಣೆಗಳಂತೆ ಇದ್ದವು. ಅವುಗಳ ಅಳತೆಯೂ ಬಾಗಿಲು
ಕದಗಳ ವಿನ್ಯಾಸವೂ ಒಂದೇ ಆಗಿತ್ತು. 12ಕೆಳಗಿನ ಕೋಣೆ
ಗಳ ಪ್ರವೇಶ ದ್ವಾರವು ಕಟ್ಟಡದ ಪೂರ್ವಭಾಗದಲ್ಲಿದ್ದು
ಗೋಡೆಯ ಬದಿಯಲ್ಲಿದ್ದ ದಾರಿಯಿಂದ ಜನರು
ಒಳಪ್ರವೇಶ ಮಾಡಬಹುದಾಗಿತ್ತು.

13ಅವನು ನನಗೆ ಹೀಗೆ ಹೇಳಿದನು, ''ಇಕ್ಕಟ್ಟಿನ ಜಾಗದ
ಬಳಿಯಲ್ಲಿ ಇರುವ ಉತ್ತರದ ಮತ್ತು ದಕ್ಷಿಣದ ಕೋಣೆ
ಗಳು ಪವಿತ್ರವಾದವುಗಳು. ಅವು ಯೆಹೋವನಿಗೆ ಯಜ್ಞ
ಸಮರ್ಪಿಸುವ ಯಾಜಕರಿಗಾಗಿ ಇವೆ. ಅಲ್ಲಿ ಯಾಜಕರು
ಅತಿ ಪವಿತ್ರ ಕಾಣಿಕೆ ಪದಾರ್ಥಗಳನ್ನು ತಿನ್ನುವರು. ಮತ್ತು
ಅಲ್ಲಿ ಅತಿ ಪವಿತ್ರ ಕಾಣಿಕೆಗಳನ್ನಿಡುವರು. ಯಾಕೆಂದರೆ
ಆ ಸ್ಥಳವು ಪವಿತ್ರವಾದದ್ದು . ಅತಿ ಪವಿತ್ರ ಕಾಣಿಕೆ ಯಾವು
ವೆಂದರೆ, ಧಾನ್ಯ ಸಮರ್ಪಣೆ, ಪಾಪ ಪರಿಹಾರಕ ಯಜ್ಞ,
ದೋಷಪರಿಹಾರಕ ಯಜ್ಞ, ಸಮಾಧಾನ ಯಜ್ಞದ
ಕಾಣಿಕೆ. 14ಈ ಪವಿತ್ರ ಸ್ಥಳಕ್ಕೆ ಪ್ರವೇಶಿಸುವ ಯಾಜಕರು
ತಮ್ಮ ದೀಕ್ಷಾವಸ್ತ್ರಗಳನ್ನು ಅಲ್ಲಿಯೇ ತೆಗೆದಿಟ್ಟು ಹೊರಗಣ
ಪ್ರಾಕಾರಕ್ಕೆ ಹೋಗಬೇಕು. ಯಾಕೆಂದರೆ ಆ ವಸ್ತುಗಳು
ಪವಿತ್ರವಾದದ್ದು. ಒಬ್ಬ ಯಾಜಕನು ಇತರ ಜನರು ಇರುವ
ಸ್ಥಳಕ್ಕೆ ಹೋಗಬೇಕಿದ್ದಲ್ಲಿ ಅವನು ಕೋಣೆಗೆ ಬಂದು
ದೀಕ್ಷಾವಸ್ತ್ರಗಳನ್ನು ತೆಗೆದಿಟ್ಟು ಬೇರೆ ವಸ್ತ್ರಗಳನ್ನು ಹಾಕಿ
ಕೊಂಡು ಹೋಗಬೇಕು.''

### ಹೊರಗಣ ಪ್ರಾಕಾರ

15ಆಲಯದ ಒಳಭಾಗದ ಅಳತೆಯನ್ನು ಅವನು
ತೆಗೆದುಕೊಂಡ ಬಳಿಕ ನನ್ನನ್ನು ಪೂರ್ವದ ದ್ವಾರದಿಂದ
ಹೊರತಂದು ಆ ಜಾಗವನ್ನೆಲ್ಲಾ ಅಳೆದನು. 16ಪೂರ್ವ
ಭಾಗವನ್ನು ಅವನು ತನ್ನ ಅಳತೆ ಕೋಲಿನಿಂದ ಅಳೆದನು.
ಅದು ಐನೂರು ಮೊಳ ಉದ್ದವಿತ್ತು. 17ಅವನು ಉತ್ತರ
ಭಾಗವನ್ನು ಅಳೆದನು, ಅದು ಐನೂರು ಮೊಳ ಉದ್ದ
ವಿತ್ತು. 18ಅವನು ದಕ್ಷಿಣದ ಭಾಗವನ್ನು ಅಳೆದನು, ಅದು
ಐನೂರು ಮೊಳ ಉದ್ದವಿತ್ತು. 19ಅನಂತರ ಪಶ್ಚಿಮದ
ಭಾಗಕ್ಕೆ ಹೋಗಿ ಅಲ್ಲಿ ಅಳೆದನು. ಅದು ಐನೂರು ಮೊಳ
ಉದ್ದವಿತ್ತು. 20ಆಲಯದ ನಾಲ್ಕು ಗೋಡೆಗಳನ್ನೂ
ಅಳೆದನು. ಆ ಗೋಡೆ ಐನೂರು ಮೊಳ ಉದ್ದವಿದ್ದು
ಐನೂರು ಮೊಳ ಅಗಲವಿತ್ತು. ಅದು ಪವಿತ್ರಸ್ಥಾನವನ್ನೂ
ಬೇರೆ ಸ್ಥಳವನ್ನೂ ಬೇರ್ಪಡಿಸಿತ್ತು.

### ಯೆಹೋವನು ತನ್ನ ಜನರ ಮಧ್ಯದಲ್ಲಿ ವಾಸಿಸುವನು

43 ಆ ಮನುಷ್ಯನು ನನ್ನನ್ನು ಪೂರ್ವದ ದ್ವಾರಕ್ಕೆ
ಕರೆದುಕೊಂಡು ಹೋದನು. 2ಅಲ್ಲಿ ಇಸ್ರೇಲ್
ದೇವರ ಮಹಿಮೆಯು ಪೂರ್ವದಿಂದ ಬಂದಿತು. ದೇವರ
ಸ್ವರವು ಸಮುದ್ರದ ಶಬ್ದದಂತೆ ಗಟ್ಟಿಯಾಗಿತ್ತು. ದೇವರ
ಮಹಿಮಾಪ್ರಕಾಶದಿಂದ ನೆಲವು ಬೆಳಕಿನಿಂದ ತುಂಬಿತ್ತು.
3ನಾನು ನೋಡಿದ ದರ್ಶನವು ಕೆಬಾರ್ ಕಾಲುವೆಯ ಬಳಿ
ಕಂಡ ದರ್ಶನದಂತಿತ್ತು. ನಾನು ಸಾಷ್ಟಾಂಗವೆರಗಿದೆನು.
4ಯೆಹೋವನ ಮಹಿಮೆಯು ಪೂರ್ವದಿಕ್ಕಿನ ದ್ವಾರದ
ಮೂಲಕ ಆಲಯದೊಳಗೆ ಬಂದಿತು.

5ಆಗ ದೇವರಾತ್ಮವು ನನ್ನನ್ನು ಎತ್ತಿಕೊಂಡು ಒಳಗಿನ
ಪ್ರಾಕಾರಕ್ಕೆ ತಂದಿತು. ಯೆಹೋವನ ಮಹಿಮೆಯು
ಆಲಯವನ್ನು ತುಂಬಿತು. 6ಆಲಯದೊಳಗಿಂದ
ಯಾರೋ ನನ್ನೊಡನೆ ಮಾತನಾಡಿದಂತೆ ಕೇಳಿಸಿತು.
ಅವನು ನನ್ನ ಬಳಿಯಲ್ಲಿ ಇನ್ನೂ ನಿಂತುಕೊಂಡಿದ್ದನು.
7ಆಲಯದೊಳಗಿಂದ ಬಂದ ಸ್ವರವು ನನಗೆ ಹೇಳಿದ್ದೇ
ನೆಂದರೆ, ''ನರಪುತ್ರನೇ, ಇದು ನನ್ನ ಸಿಂಹಾಸನವೂ ಪಾದ
ಪೀಠವೂ ಇರುವ ಸ್ಥಳ. ನಾನು ಇಲ್ಲಿ ನನ್ನ ಜನರಾದ
ಇಸ್ರೇಲರ ಮಧ್ಯದಲ್ಲಿ ನಿರಂತರವೂ ವಾಸಿಸುವೆನು.
ಇಸ್ರೇಲ್ ಜನಾಂಗವು ಇನ್ನು ಮುಂದೆ ನನ್ನ ಪವಿತ್ರವಾದ
ಹೆಸರನ್ನು ಹಾಳು ಮಾಡುವದಿಲ್ಲ. ರಾಜರೂ, ಅವರ
ಜನರೂ ಲೈಂಗಿಕ ಪಾಪಗಳನ್ನು ಮಾಡಿ ನನ್ನನ್ನು ಅವಮಾನ
ಪಡಿಸರು. ಅವರ ರಾಜುಗಳ ಮೃತಶರೀರವನ್ನು ಇಲ್ಲಿ
ಸಮಾಧಿ ಮಾಡುವದಿಲ್ಲ. 8ಅವರ ಹೊಸ್ತಿಲನ್ನು ನನ್ನ
ಹೊಸ್ತಿಲ ಬಳಿಯಲ್ಲಿ ಇಡುವದರಿಂದ ಅವರ ನಿಲುವು
ಗಳನ್ನು ನನ್ನ ನಿಲುವುಗಳ ಬಳಿಯಲ್ಲಿ ಇಡುವದರಿಂದ
ಅವರು ನನ್ನ ಹೆಸರಿಗೆ ಅವಮಾನ ಮಾಡುವದಿಲ್ಲ. ಹಿಂದಿನ
ಕಾಲದಲ್ಲಿ, ಕೇವಲ ಒಂದೇ ಗೋಡೆಯು ಅವರಿಂದ
ನನ್ನನ್ನು ಪ್ರತ್ಯೇಕಿಸಿತ್ತು. ಆದ್ದರಿಂದ ಪ್ರತಿಯೊಂದು ಸಲ
ಅವರು ಪಾಪ ಮಾಡಿದಾಗ ಮತ್ತು ಆ ಭಯಂಕರ

ಕೃತ್ಯಗಳನ್ನು ಮಾಡಿದಾಗ ನನ್ನ ಹೆಸರಿಗೆ ಅವಮಾನ
ವಾಯಿತು. ಆದುದರಿಂದ ನಾನು ಕೋಪಗೊಂಡು
ಅವರನ್ನು ನಾಶಮಾಡಿದೆನು. 9ಈಗ ಅವರು ತಮ್ಮ ಲೈಂಗಿಕ
ಪಾಪಗಳನ್ನು ತೆಗೆದುಬಿಡಲಿ ಮತ್ತು ತಮ್ಮ ರಾಜರ ಹೆಣ
ಗಳನ್ನೂ ನನ್ನಿಂದ ದೂರಮಾಡಲಿ. ಆಗ ನಾನು
ಅವರೊಂದಿಗೆ ನಿರಂತರವಾಗಿ ವಾಸಿಸುವೆನು.

10‘‘ಈಗ, ನರಪುತ್ರನೇ, ಇಸ್ರೇಲ್ ಜನಾಂಗದವರಿಗೆ
ಆಲಯದ ವಿಚಾರವಾಗಿ ತಿಳಿಸು. ಆಲಯದ ವಿನ್ಯಾಸದ
ಬಗ್ಗೆ ಅವರು ತಿಳಿದಾಗ ತಮ್ಮ ಪಾಪಗಳಿಗಾಗಿ ಅವರು
ನಾಚಿಕೆಪಡುವರು. 11ಅವರು ತಮ್ಮ ಎಲ್ಲಾ ಪಾಪಗಳ
ನಿಮಿತ್ತ ನಾಚಿಕೆ ಪಡುವರು. ಆಲಯದ ವಿನ್ಯಾಸವನ್ನು
ಅವರು ತಿಳಿದುಕೊಳ್ಳಲಿ. ಅದು ಹೇಗೆ ಕಟ್ಟಲ್ಪಡ
ಬೇಕೆಂಬುದನ್ನು ಪ್ರವೇಶ ದ್ವಾರಗಳು ಮತ್ತು ಹೊರಗೆ
ಹೋಗುವ ಬಾಗಿಲುಗಳು ಎಲ್ಲಿರಬೇಕೆಂಬುದನ್ನು ಮತ್ತು
ಅವುಗಳ ಮೇಲೆ ಇರಬೇಕಾದ ಎಲ್ಲಾ ಚಿತ್ರಗಳನ್ನು ಅವರು
ತಿಳಿದುಕೊಳ್ಳಲಿ. ಅದರ ನಿಯಮಗಳನ್ನು, ಕಟ್ಟಳೆಗಳನ್ನು
ಅವರಿಗೆ ಬೋಧಿಸಿರಿ. ಅವರು ಎಲ್ಲಾ ಧರ್ಮ ಬೋಧನೆ
ಗಳನ್ನು ಅನುಸರಿಸುವಂತೆ ಎಲ್ಲಾ ಕಟ್ಟಳೆಗಳನ್ನು
ಬರೆದಿಡಿರಿ.

12‘‘ಇದು ಆಲಯದ ಕಟ್ಟಳೆ: ಪರ್ವತದ ಮೇಲಿನ ಎಲ್ಲಾ
ಪ್ರಾಂತ್ಯದ ಮೇರೆಯೊಳಗಿರುವ ಸ್ಥಳವು ಅತಿ ಪರಿಶುದ್ಧ
ವಾದದ್ದು.

### ಯಜ್ಞವೇದಿಕೆ

13‘‘ಯಜ್ಞವೇದಿಕೆ ಉದ್ದಮೊಳದ* ಅಳತೆಯ ಪ್ರಕಾರ
ಇರಬೇಕು. ಯಜ್ಞವೇದಿಯ ಅಡಿಪಾಯದ ಸುತ್ತಲೂ
ಕಾಲಿವೆ ತೋಡಲ್ಪಟ್ಟಿತ್ತು. ಅದರ ಆಳ ಒಂದು ಮೊಳ.
ಪ್ರತಿಯೊಂದು ಕಡೆಯಲ್ಲಿ ಅದರ ಅಗಲ ಒಂದು ಮೊಳ.
ಯಜ್ಞವೇದಿಯ ಸುತ್ತ ಒಂದು ಗೇಣುದ್ದದ ಚೌಕಟ್ಟಿತ್ತು.
ಇದು ಎತ್ತರವಾದ ಯಜ್ಞವೇದಿಯ ವಿನ್ಯಾಸ. 14ನೆಲದಿಂದ
ಅಡಿಪಾಯದ ತಳದವರೆಗೆ ಅಡಿಪಾಯದ ಎತ್ತರ ಎರಡು
ಮೊಳ, ಅದರ ಅಗಲ ಒಂದು ಮೊಳ, ಚಿಕ್ಕ ಸಜ್ಜ* ದಿಂದ
ದೊಡ್ಡ ಸಜ್ಜದವರೆಗೆ ನಾಲ್ಕು ಮೊಳ ಎತ್ತರ, ಎರಡು ಮೊಳ
ಅಗಲ. 15ಯಜ್ಞವೇದಿಯ ಮೇಲೆ ಬೆಂಕಿ ಹಾಕುವ ಸ್ಥಳದ
ಎತ್ತರ ನಾಲ್ಕು ಮೊಳ. ಅದರ ನಾಲ್ಕು ಮೂಲೆಗಳು
ಕೊಂಬಿನ ಆಕಾರದಂತಿದ್ದವು. 16ಬೆಂಕಿ ಹಾಕುವ ಸ್ಥಳದ
ಉದ್ದ ಹನ್ನೆರಡು ಮೊಳ; ಅಗಲ ಹನ್ನೆರಡು ಮೊಳ. ಅದು
ಚಚ್ಚೌಕವಾಗಿತ್ತು. 17ಅದರ ಮೆಟ್ಟಲು ಹದಿನಾಲ್ಕು ಮೊಳ
ಅಗಲ, ಹದಿನಾಲ್ಕು ಮೊಳ ಉದ್ದವಾಗಿದ್ದು ಚಚ್ಚೌಕ
ವಾಗಿತ್ತು. ಅದರ ಸುತ್ತಲೂ ಇದ್ದ ಅಂಚು ಅರ್ಧ ಮೊಳ
ಅಗಲವಾಗಿತ್ತು. (ಅಡಿಪಾಯದ ಸುತ್ತಲೂ ಇದ್ದ ಕಾಲು
ವೆಯ ಅಗಲ ಎರಡು ಮೊಳ.) ಯಜ್ಞವೇದಿಯ ಮೇಲೆ
ಹತ್ತುವ ಮೆಟ್ಟಿಲುಗಳು ಪೂರ್ವಭಾಗದಲ್ಲಿದ್ದವು.’’

18ಆಗ ಅವನು ನನಗೆ, ‘‘ನರಪುತ್ರನೇ, ಒಡೆಯನಾದ
ಯೆಹೋವನು ಹೀಗೆನ್ನುತ್ತಾನೆ: ‘ಯಜ್ಞವೇದಿಯ ಕ್ರಮ
ಗಳು ಯಾವದೆಂದರೆ, ಯಜ್ಞವೇದಿಯನ್ನು ಕಟ್ಟುವಾಗ
ಸರ್ವಾಂಗ ಹೋಮ ಮತ್ತು ಅದರ ಮೇಲೆ ರಕ್ತ
ಚಿಮುಕಿಸುವದಕ್ಕೆ ಈ ಕ್ರಮಗಳನ್ನು ಅನುಸರಿಸು.
19ಚಾದೋಕನ ಸಂತತಿಯ ಯಾಜಕರ ಪಾಪಪರಿ
ಹಾರಕ್ಕಾಗಿ ನೀನು ಒಂದು ಎಳೆ ಹೋರಿಯನ್ನು ಅರ್ಪಿಸು.
ಇವರು ಲೇವಿ ವಂಶದ ಯಾಜಕರು. ಇವರು ಕಾಣಿಕೆ
ಗಳನ್ನು ನನಗೆ ಅರ್ಪಿಸುವ ಸೇವೆ ಮಾಡುವವರಾಗಿರು
ತ್ತಾರೆ.’’’ ಇದು ನನ್ನ ಒಡೆಯನಾದ ಯೆಹೋವನ ನುಡಿ.
20‘‘ನೀನು ಹೋರಿಯ ರಕ್ತವನ್ನು ತೆಗೆದು ವೇದಿಯ
ನಾಲ್ಕು ಕೊಂಬುಗಳಲ್ಲಿ ಪ್ರೋಕ್ಷಿಸಬೇಕು: ಮತ್ತು
ಮೆಟ್ಟಲಿನ ನಾಲ್ಕು ಮೂಲೆಗಳಿಗೂ,ಅದರ ಸುತ್ತಲೂ
ಇರುವ ದಿಂಡಿನ ಮೇಲೂ ರಕ್ತ ಪ್ರೋಕ್ಷಿಸಬೇಕು. ಹೀಗೆ
ಮಾಡುವಾಗ ನೀನು ವೇದಿಯನ್ನು ಪವಿತ್ರಗೊಳಿಸುವಿ.
21ಆಮೇಲೆ ಪಾಪಪರಿಹಾರದ ಹೋರಿಯನ್ನು ತೆಗೆದು
ಆಲಯದ ಜಾಗದಲ್ಲಿ ಆಲಯದ ಹೊರಗಿರುವ ಸ್ಥಳದಲ್ಲಿ
ಸುಡ ಬೇಕು.

22‘‘ಎರಡನೇ ದಿವಸದಲ್ಲಿ ಪೂರ್ಣಾಂಗವಾದ ಹೋತ
ವನ್ನು ನೀನು ಅರ್ಪಿಸಬೇಕು. ಅದು ಪಾಪಪರಿಹಾರಕ
ಯಜ್ಞಕ್ಕಾಗಿ ಯಾಜಕರು ಹೇಗೆ ಯಜ್ಞವೇದಿಯನ್ನು
ಪವಿತ್ರ ಮಾಡಿದರೋ ಅದೇ ರೀತಿಯಲ್ಲಿ ತಿರುಗಿ ಮಾಡ
ಬೇಕು. 23ಯಜ್ಞವೇದಿಯನ್ನು ಶುದ್ಧೀಕರಿಸಿದ ನಂತರ
ನಿಷ್ಕಳಂಕವಾದ ಒಂದು ಹೋರಿ ಮತ್ತು ಹಿಂಡಿನಿಂದ
ಒಂದು ಟಗರನ್ನು ಸಮರ್ಪಿಸಬೇಕು. 24ಯೆಹೋವನ
ಸನ್ನಿಧಾನದಲ್ಲಿ ಅವುಗಳನ್ನು ವಧಿಸಬೇಕು. ಆ ಮೇಲೆ
ಯಾಜಕರು ಅದರ ಮೇಲೆ ಉಪ್ಪು ಚಿಮುಕಿಸಿ ಹೋರಿ
ಮತ್ತು ಟಗರನ್ನು ಸರ್ವಾಂಗ ಹೋಮವಾಗಿ ಸಮರ್ಪಿಸ
ಬೇಕು.

25‘‘ದೋಷಪರಿಹಾರಕ ಯಜ್ಞಕ್ಕಾಗಿ ಪ್ರತಿದಿವಸ ಏಳು
ದಿವಸಗಳ ತನಕ ಒಂದೊಂದು ಆಡನ್ನು ಸಮರ್ಪಿಸ ಬೇಕು.
ಅದೇ ಸಮಯದಲ್ಲಿ ನಿಷ್ಕಳಂಕವಾದ ಒಂದು ಎಳೇ
ಹೋರಿ ಮತ್ತು ಟಗರುಗಳನ್ನು ದೋಷಪರಿಹಾರಕ ಯಜ್ಞ
ಕ್ಕಾಗಿ ಸಮರ್ಪಿಸಬೇಕು. 26ಏಳು ದಿವಸಗಳ ತನಕ
ಯಾಜಕರು ವೇದಿಯನ್ನು ಪವಿತ್ರ ಮಾಡಬೇಕು ಮತ್ತು
ದೇವರನ್ನು ಆರಾಧಿಸುವದಕ್ಕೆ ಸಿದ್ಧಪಡಿಸಬೇಕು. 27ಏಳು
ದಿವಸಗಳ ತರುವಾಯ, ಎಂಟನೇ ದಿನದಲ್ಲಿ ಯಾಜಕರು
ನಿನ್ನ ಪರವಾಗಿ ಸರ್ವಾಂಗಹೋಮವನ್ನೂ, ಸಮಾಧಾನ

---

**ಉದ್ದಮೊಳ** ಅಕ್ಷರಶಃ ‘‘ಒಂದು ಮೊಳ ಮತ್ತು ಒಂದು ಕೈಹಿಡಿ.’’

**ಸಜ್ಜ** ಯಜ್ಞವೇದಿಕೆಯ ಸುತ್ತಲೂ ಯಾಜಕರು ನಡೆದು ಹೋಗಲು ಇದ್ದ ಸ್ಥಳ.

ಯಜ್ಞವನ್ನೂ ಅರ್ಪಿಸಬೇಕು. ಆಗ ನಾನು ನಿಮಗೆ ಪ್ರಸನ್ನ
ನಾಗುವೆನು.'' ನನ್ನ ಒಡೆಯನಾದ ಯೆಹೋವನ
ನುಡಿಗಳಿವು.

## ಹೊರಗಿನ ದ್ವಾರ

44 ಆ ಬಳಿಕ ನನ್ನನ್ನು ಆ ಮನುಷ್ಯನು ಆಲಯದ
ಪೂರ್ವದ್ವಾರಕ್ಕೆ ತಂದನು. ನಾವು ದ್ವಾರದ
ಹೊರಗಿದ್ದೆವು. ದ್ವಾರವು ಮುಚ್ಚಿತ್ತು. 2ಆಗ ಯೆಹೋವನು
ನನಗೆ ಹೀಗೆಂದನು, ''ಈ ದ್ವಾರವು ಮುಚ್ಚಿಯೇ
ಇರಬೇಕು. ಇದು ತೆರೆಯಲ್ಪಡುವದಿಲ್ಲ. ಇದರ ಮೂಲಕ
ಯಾರೂ ಪ್ರವೇಶ ಮಾಡುವದಿಲ್ಲ. ಯಾಕೆಂದರೆ
ಇಸ್ರೇಲಿನ ದೇವರಾದ ಯೆಹೋವನು ಈ ದ್ವಾರದ
ಮೂಲಕ ಪ್ರವೇಶಿಸಿದ್ದನು. ಆದುದರಿಂದ ಇದು
ಮುಚ್ಚಿಯೇ ಇರಬೇಕು. 3ಜನರ ಅಧಿಪತಿಯು ಯೆಹೋ
ವನ ಸನ್ನಿಧಿಯಲ್ಲಿ ಊಟ ಮಾಡಲು ಬರುವಾಗ ಅವನು
ಮಾತ್ರ ಈ ದ್ವಾರದ ಬಳಿ ಕುಳಿತುಕೊಳ್ಳಬಹುದು. ಅಧಿ
ಪತಿಯು ದ್ವಾರದ ಮಂಟಪದ ಮೂಲಕ ಪ್ರವೇಶಿಸಬೇಕು
ಮತ್ತು ಅದೇ ಮಾರ್ಗದಲ್ಲಿ ಹೊರ ಬರಬೇಕು.''

## ಆಲಯದ ಪವಿತ್ರತೆ

4ಆ ಬಳಿಕ ನನ್ನನ್ನು ಉತ್ತರದ ದ್ವಾರದ ಮೂಲಕ
ಆಲಯದ ಮುಂಭಾಗಕ್ಕೆ ಅವನು ಕರೆದುಕೊಂಡು
ಹೋದನು. ನಾನು ನೋಡಿದಾಗ ಯೆಹೋವನ ತೇಜಸ್ಸು
ಆತನ ಆಲಯವನ್ನು ತುಂಬುತ್ತಿತ್ತು. ನಾನು ಸಾಷ್ಟಾಂಗ
ವೆರಗಿದೆನು. 5ಆಗ ಯೆಹೋವನು ಹೇಳಿದ್ದೇನಂದರೆ,
''ನರಪುತ್ರನೇ, ಕಿವಿಯಾರೆ ಕೇಳು, ಕಣ್ಣಾರೆ ನೋಡಿ
ಅರ್ಥಮಾಡಿಕೊ. ಪವಿತ್ರಾಲಯದ ಎಲ್ಲಾ ವಿಧಿ ನಿಯಮ
ಗಳನ್ನು ಗಮನವಿಟ್ಟು ಕೇಳು. ಆಲಯದೊಳಕ್ಕೆ ಬರುವ
ಪ್ರವೇಶ ದ್ವಾರಗಳನ್ನೂ ಪವಿತ್ರ ಸ್ಥಾನದಿಂದ ಹೊರ
ಹೋಗುವ ಪ್ರವೇಶ ದ್ವಾರಗಳನ್ನೂ ಗಮನವಿಟ್ಟು
ನೋಡು. 6ಅನಂತರ ನನ್ನ ಮಾತಿಗೆ ವಿಧೇಯರಾಗಲು
ನಿರಾಕರಿಸುವ ಎಲ್ಲಾ ಇಸ್ರೇಲರಿಗೆ ಹೀಗೆ ಹೇಳು: 'ನನ್ನ
ಒಡೆಯನಾದ ಯೆಹೋವನು ಹೇಳುವದೇನೆಂದರೆ,
ಇಸ್ರೇಲ್ ಜನಾಂಗವೇ, ನೀವು ಮಾಡಿರುವ ಭಯಂಕರ
ಕೃತ್ಯಗಳು ನನಗೆ ಸಾಕಾಗಿವೆ. 7ನೀವು ನನ್ನ ಆಲಯದೊಳಗೆ
ಅನ್ಯರನ್ನು ತಂದಿರುತ್ತೀರಿ. ಅವರು ಸುನ್ನತಿಯಾದವ ರಾಗಿ
ರಲಿಲ್ಲ. ಅವರು ಸಂಪೂರ್ಣವಾಗಿ ನನ್ನನ್ನು ನಂಬಿರಲಿಲ್ಲ.
ಈ ರೀತಿಯಾಗಿ ನೀವು ನನ್ನ ಆಲಯವನ್ನು ಹೊಲೆ
ಮಾಡಿರುತ್ತೀರಿ. ನೀವು ನಾವು ಮಾಡಿಕೊಂಡ ಒಡಂಬಡಿ
ಕೆಯನ್ನು ಮುರಿದುಬಿಟ್ಟಿರಿ. ಭಯಂಕರ ಕೃತ್ಯಗಳನ್ನು
ಮಾಡಿ ಆಮೇಲೆ ನನಗೆ ರೊಟ್ಟಿ, ಕೊಬ್ಬು, ರಕ್ತಗಳ ಕಾಣಿಕೆ
ಅರ್ಪಿಸುತ್ತೀರಿ. ಆದರೆ ಇವೆಲ್ಲಾ ನನ್ನ ಆಲಯವನ್ನು
ಅಶುದ್ಧಗೊಳಿಸುತ್ತಿವೆ.

8''ನೀವು ನನ್ನ ಪವಿತ್ರ ವಸ್ತುಗಳನ್ನು ಅಲಕ್ಷ್ಯ ಮಾಡಿದಿರಿ.
ನನ್ನ ಪವಿತ್ರ ಸ್ಥಾನದ ಜವಾಬ್ದಾರಿಕೆಯನ್ನು ನೀವು ಅನ್ಯರ
ವಶಮಾಡಿದ್ದೀರಿ.'''

9ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ''ಇಸ್ರೇಲರೊಂದಿಗೆ ವಾಸವಾಗಿರುವ ಅನ್ಯಜನ
ರೊಳಗೆ ತನುಮನಗಳಲ್ಲಿ ಸುನ್ನತಿಯಾಗಿಲ್ಲದವನು ನನ್ನ
ಪವಿತ್ರಾಲಯವನ್ನು ಪ್ರವೇಶಿಸಕೂಡದು. 10ಗತಕಾಲ
ದಲ್ಲಿ ಇಸ್ರೇಲರು ನನ್ನನ್ನು ತ್ಯಜಿಸಿದಾಗ ಲೇವಿಯರು
ನನ್ನನ್ನು ಬಿಟ್ಟು ಹೋದರು. ಇಸ್ರೇಲರು ನನ್ನನ್ನು ಬಿಟ್ಟು
ವಿಗ್ರಹಗಳನ್ನು ಆರಾಧಿಸಿದರು. ಲೇವಿಯರು ಮಾಡಿದ
ಪಾಪಕ್ಕಾಗಿ ಶಿಕ್ಷಿಸಲ್ಪಡುವರು. 11ನನ್ನ ಪವಿತ್ರ ಸ್ಥಳದಲ್ಲಿ
ಸೇವೆಮಾಡಲು ಲೇವಿಯರು ಆರಿಸಲ್ಪಟ್ಟಿರುತ್ತಾರೆ.
ಅವರು ಆಲಯದ ಪ್ರವೇಶ ದ್ವಾರವನ್ನು ಕಾವಲು
ಕಾಯ್ದರು. ಆಲಯದೊಳಗೆ ಸೇವೆ ಮಾಡಿದರು. ಜನರು
ಅರ್ಪಿಸುವ ಪ್ರಾಣಿಗಳನ್ನು ವಧಿಸಿ ಯಜ್ಞಕ್ಕಾಗಿ ಅವುಗಳನ್ನು
ತಯಾರುಮಾಡಿ ಸರ್ವಾಂಗಹೋಮ, ಯಜ್ಞಗಳನ್ನು
ಸಮರ್ಪಿಸಿದರು. ಜನರಿಗೆ ಸಹಾಯ ಮಾಡಿ, ಅವರ ಸೇವೆ
ಮಾಡಲು ಅವರು ಆರಿಸಲ್ಪಟ್ಟಿದ್ದಾರೆ. 12ಆದರೆ ಆ
ಲೇವಿಯರು, ಜನರು ನನಗೆ ವಿರುದ್ಧವಾಗಿ ಪಾಪ ಮಾಡು
ವಂತೆ ಸಹಾಯಮಾಡಿದರು. ಜನರು ತಮ್ಮ ವಿಗ್ರಹಗಳನ್ನು
ಪೂಜಿಸುವಂತೆ ಅವರಿಗೆ ಸಹಾಯ ಮಾಡಿದರು.
ಆದುದರಿಂದ ನಾನು ವಾಗ್ದಾನ ಮಾಡುವದೇನೆಂದರೆ,
'ಅವರು ಮಾಡಿದ ಪಾಪಗಳಿಗಾಗಿ ಅವರು ಶಿಕ್ಷಿಸಲ್ಪಡು
ವರು.'' ಇದು ನನ್ನ ಒಡೆಯನಾದ ಯೆಹೋವನ ನುಡಿ.

13''ಆದುದರಿಂದ ಯಾಜಕರಂತೆ ಲೇವಿಯರು ನನಗೆ
ಕಾಣಿಕೆಗಳನ್ನು ತರಕೂಡದು. ಅವರು ನನ್ನ ಪವಿತ್ರ
ವಸ್ತುಗಳ ಬಳಿಗೂ, ಅತೀ ಪವಿತ್ರ ವಸ್ತುಗಳ ಬಳಿಗೂ ಬರ
ಬಾರದು. ಅವರು ಮಾಡಿದ ಭಯಂಕರ ಕೃತ್ಯಗಳಿಗಾಗಿ
ಅವರು ಅವಮಾನಿತರಾಗಬೇಕು. 14ಆದರೆ ನಾನು ನನ್ನ
ಆಲಯದಲ್ಲಿ ಸೇವೆ ಮಾಡಲು ಅವರಿಗೆ ಬಿಡುವೆನು.
ಅವರು ಅದರೊಳಗೆ ಮಾಡಬೇಕಾದ ಸೇವೆಯನ್ನು
ಮಾಡುವರು.

15''ಯಾಜಕರೆಲ್ಲರೂ ಲೇವಿ ಕುಲಕ್ಕೆ ಸಂಬಂಧ
ಪಟ್ಟವರು. ಆದರೆ ಲೇವಿಯರು ನನ್ನನ್ನು ಬಿಟ್ಟು ತೊಲಗಿ
ದಾಗ ಚಾದೋಕನ ಸಂತತಿಯವರಾದ ಯಾಜಕರು ನನ್ನ
ಪವಿತ್ರ ಸ್ಥಳವನ್ನು ಪರಾಂಬರಿಸಿದರು. ಆದುದರಿಂದ
ಚಾದೋಕನ ಸಂತತಿಯವರು ಮಾತ್ರ ನನಗೆ ಕಾಣಿಕೆ
ಗಳನ್ನು ಸಮರ್ಪಿಸುವರು. ಅವರು ನನ್ನ ಸನ್ನಿಧಿಯಲ್ಲಿ
ನಿಂತು ಯಜ್ಞ ಮಾಡಲ್ಪಡುವ ಪ್ರಾಣಿಗಳ ಕೊಬ್ಬು ಮತ್ತು
ರಕ್ತವನ್ನು ನನಗೆ ಸಮರ್ಪಿಸುವರು. '' ಇದು ನನ್ನ ಒಡೆಯ
ನಾದ ಯೆಹೋವನ ನುಡಿ. 16''ಅವರು ನನ್ನ ಪವಿತ್ರ
ಸ್ಥಳವನ್ನು ಪ್ರವೇಶಿಸುವರು. ನನ್ನ ಮೇಜಿನ ಬಳಿಗೆ ನನಗೆ

ಸೇವೆಮಾಡಲು ಬರುವರು. ನಾನು ಅವರಿಗೆ ವಹಿಸಿರುವ
ವಸ್ತುಗಳನ್ನು ಪರಾಂಬರಿಸುವರು. 17 ಒಳಗಿನ ಪ್ರಾಕಾರದ
ಪ್ರವೇಶ ದ್ವಾರವನ್ನು ಹೊಕ್ಕುವಾಗ ಅವರು ನಾರುಮಡಿ
ಬಟ್ಟೆಯನ್ನು ಧರಿಸುವರು. ಅವರು ಒಳಗಿನ ಪ್ರಾಕಾರದ
ಪ್ರವೇಶ ದ್ವಾರದಲ್ಲಾಗಲೀ, ಆಲಯದೊಳಗಾಗಲೀ
ಸೇವೆಮಾಡುವಾಗ ಉಣ್ಣೆಯಿಂದ ಮಾಡಿದ ಬಟ್ಟೆಯನ್ನು
ಧರಿಸಿಕೊಳ್ಳುವದಿಲ್ಲ. 18 ಅವರು ನಾರುಮಡಿಯ
ಮುಂಡಾಸವನ್ನು ಧರಿಸಿಕೊಳ್ಳುವರು. ಅದೇ ಬಟ್ಟೆಯ
ಚಡ್ಡಿಯನ್ನೂ ಧರಿಸುವರು. ಅವರಿಗೆ ಬೆವರು ಬರಿಸುವ
ಯಾವ ಬಟ್ಟೆಯಾಗಲೀ ಅವರು ಧರಿಸುವದಿಲ್ಲ.
19 ಹೊರಗಿನ ಪ್ರಾಕಾರದಲ್ಲಿರುವ ಜನರ ಬಳಿಗೆ ಅವರು
ಹೋಗುವಾಗ, ನನ್ನ ಸೇವೆ ಮಾಡಲು ಅವರು ಧರಿಸಿ
ಕೊಂಡಿದ್ದ ವಸ್ತ್ರಗಳನ್ನು ತೆಗೆದಿಡುವರು. ಒಳಗಿನ
ಪ್ರಾಕಾರದಲ್ಲಿರುವ ವಿಶೇಷವಾದ ಉಗ್ರಾಣ ಕೋಣೆ
ಯಲ್ಲಿ ಅವರು ಆ ವಸ್ತ್ರಗಳನ್ನು ಇಡುವರು ಮತ್ತು ಹೊರ
ಗಿನ ಪ್ರಾಕಾರದಲ್ಲಿರುವ ಜನರ ಬಳಿಗೆ ಹೋಗುವಾಗ
ಬೇರೆ ಬಟ್ಟೆಗಳನ್ನು ಧರಿಸಿಕೊಳ್ಳುವರು. ಹೀಗೆ ಅವರು
ಮಾಡುವದರಿಂದ ಸಾಮಾನ್ಯ ಜನರು ಆ ವಿಶೇಷವಾದ
ಬಟ್ಟೆಗಳನ್ನು ಮುಟ್ಟಿದಂತಾಗುವುದು.

20 “ಆ ಯಾಜಕರು ತಮ್ಮ ತಲೆಯನ್ನು ಬೋಳಿಸು
ವದೂ ಇಲ್ಲ ಮತ್ತು ತಲೇ ಕೂದಲನ್ನು ಉದ್ದವಾಗಿ
ಬೆಳೆಸುವದೂ ಇಲ್ಲ. ಇದು ಅವರಲ್ಲಿರುವ ಶೋಕವನ್ನು
ಸೂಚಿಸುತ್ತದೆ. ಯಾಜಕರು ಯೆಹೋವನ ಸೇವೆ ಮಾಡು
ವಾಗ ಸಂತೋಷದಿಂದಿರಬೇಕು. ಅವರು ತಮ್ಮ ತಲೆ
ಗೂದಲನ್ನು ಸಣ್ಣದಾಗಿರಿಸುವದಕ್ಕೆ ಕತ್ತರಿಸಬಹುದು.
21 ಯಾಜಕರು ಒಳಗಿನ ಪ್ರಾಕಾರವನ್ನು ಪ್ರವೇಶಿಸುವಾಗ
ದ್ರಾಕ್ಷಾರಸವನ್ನು ಕುಡಿದಿರಬಾರದು. 22 ಯಾಜಕರು
ವಿಧವೆಯರನ್ನಾಗಲೀ, ವಿವಾಹವಿಚ್ಛೇದನಗೊಂಡ
ಸ್ತ್ರೀಯರನ್ನಾಗಲೀ, ಮದುವೆಯಾಗಕೂಡದು. ಇಸ್ರೇಲ್
ಸಂತತಿಯವಳೇ ಆಗಿರುವ ಕನ್ನಿಕೆಯನ್ನಾಗಲೀ ಅಥವಾ
ಯಾಜಕನಾಗಿದ್ದ ತನ್ನ ಗಂಡನನ್ನು ಕಳೆದುಕೊಂಡ
ವಿಧವೆಯನ್ನಾಗಲೀ ಮದುವೆಯಾಗಬೇಕು.

23 “ಯಾಜಕರು ಜನರಿಗೆ ಪವಿತ್ರ ವಸ್ತುಗಳ ಮತ್ತು
ಪವಿತ್ರವಲ್ಲದ ವಸ್ತುಗಳ ಬಗ್ಗೆ ಉಪದೇಶಿಸಬೇಕು. ಒಬ್ಬ
ನನ್ನು ಅಶುದ್ಧನನ್ನಾಗಿ ಮಾಡುವಂಥವುಗಳ ಬಗ್ಗೆ ಇರುವ
ನಿಯಮಗಳನ್ನು ಅವರು ಜನರಿಗೆ ಉಪದೇಶಿಸಬೇಕು.
24 ವ್ಯಾಜ್ಯಗಳಿಗೆ ತೀರ್ಪು ನೀಡುವ ನ್ಯಾಯಾಧೀಶರಾಗಿ
ಯಾಜಕರು ಸೇವೆ ಮಾಡಬೇಕು ಮತ್ತು ನನ್ನ ಆಡಳಿತ
ವನ್ನು ಆಧರಿಸಿ ಅವರು ತೀರ್ಪು ನೀಡಬೇಕು. ಅವರು
ವಿಶೇಷವಾದ ಕೂಟಗಳನ್ನು ಏರ್ಪಡಿಸುವಾಗ ನನ್ನ
ನಿಯಮಗಳನ್ನು ಮತ್ತು ವಿಧಿಗಳನ್ನು ಅನುಸರಿಸುವರು
ಮತ್ತು ವಿಶೇಷವಾದ ಎಲ್ಲಾ ರಜಾದಿನಗಳನ್ನು ಮತ್ತು
ಸಬ್ಬತ್ ದಿನಗಳನ್ನು ಅವರು ಗೌರವಿಸುವರು. 25 ಸತ್ತ
ಹೆಣದ ಬಳಿಗೆ ಹೋಗಿ ಅವರು ತಮ್ಮನ್ನು ಅಪವಿತ್ರ ಮಾಡಿ
ಕೊಳ್ಳಬಾರದು. ಆದರೆ ಸತ್ತವರು ತಮ್ಮ ಹೆತ್ತವರಾಗಲೀ,
ಮಕ್ಕಳಾಗಲೀ ಅಥವಾ ಮದುವೆಯಾಗದಿದ್ದ ಸಹೋದರ
ಸಹೋದರಿಯರಾಗಲೀ ಆಗಿದ್ದಲ್ಲಿ ಅವರು ತಮ್ಮನ್ನು
ಅಪವಿತ್ರ ಮಾಡಿಕೊಳ್ಳಬೇಕಾಗುತ್ತದೆ. 26 ಆ ಯಾಜಕನು
ತನ್ನನ್ನು ಶುದ್ಧ ಮಾಡಿಕೊಂಡ ತರುವಾಯ ತಾನು ಏಳು
ದಿವಸ ಕಾಯಬೇಕು. 27 ಅನಂತರ ಪವಿತ್ರ ಸ್ಥಾನಕ್ಕೆ ತಿರುಗಿ
ಹೋಗಬಹುದು. ಆದರೆ ಮೊದಲು ತನಗಾಗಿ ಪಾಪ
ಪರಿಹಾರಕ ಯಜ್ಞವನ್ನು ಸಮರ್ಪಿಸಿಕೊಳ್ಳಬೇಕು.” ಇದು
ನನ್ನ ಒಡೆಯನಾದ ಯೆಹೋವನ ನುಡಿ.

28 “ಲೇವಿಯರ ಆಸ್ತಿಯು ನಾನೇ, ಇಸ್ರೇಲರೊಳಗೆ
ಅವರಿಗೆ ಯಾವ ಆಸ್ತಿಯೂ ಇರುವದಿಲ್ಲ. ನಾನೇ ಅವರ
ಸ್ವಾಸ್ಥ್ಯ. 29 ಜನರು ಧಾನ್ಯದ ಸಮರ್ಪಣೆ, ಪರಿಹಾರಕ
ಯಜ್ಞ, ದೋಷಪರಿಹಾರಕ ಯಜ್ಞಕ್ಕೆ ತಂದ ಕಾಣಿಕೆಯೇ
ಅವರ ಆಹಾರವಾಗಿರುವದು. 30 ಎಲ್ಲಾ ಪ್ರಥಮಫಲವು
ಯಾಜಕರಿಗೆ ಸಲ್ಲತಕ್ಕದ್ದು. ಅಲ್ಲದೆ ನೀವು ನಾದುವ
ಮೊದಲನೆ ರೊಟ್ಟಿಯ ಹಿಟ್ಟು ಯಾಜಕರಿಗೆ ಕೊಡಬೇಕು.
ಹೀಗೆ ಮಾಡಿದ್ದಲ್ಲಿ ನೀವು ಆಶೀರ್ವದಿಸಲ್ಪಡುತ್ತೀರಿ.
31 ಯಾಜಕರು ಸ್ವಾಭಾವಿಕವಾಗಿ ಸತ್ತ ಅಥವಾ ವನ್ಯಜಂತು
ಗಳು ಕೊಂದಿರುವ ಯಾವ ಪ್ರಾಣಿಯಾಗಲೀ ಪಕ್ಷಿ
ಯಾಗಲೀ ಅದರ ಮಾಂಸವನ್ನು ತಿನ್ನಬಾರದು.

### ಪವಿತ್ರ ಕಾರ್ಯಕ್ಕಾಗಿ ದೇಶದ ವಿಭಜನೆ

45 “ನೀನು ಚೀಟುಹಾಕಿ ಇಸ್ರೇಲರ ವಂಶಗಳಿಗನು
ಸಾರವಾಗಿ ದೇಶವನ್ನು ವಿಂಗಡಿಸಬೇಕು. ಆ
ಸಮಯದಲ್ಲಿ ಒಂದು ಭಾಗವನ್ನು ಪ್ರತ್ಯೇಕಿಸಿಡಬೇಕು.
ಅದು ಯೆಹೋವನಿಗೋಸ್ಕರ ಮೀಸಲಾಗಿಡಲ್ಪಟ್ಟದ್ದು.
ಆ ಪ್ರದೇಶವು ಇಪ್ಪತ್ತೈದು ಸಾವಿರ ಮೊಳ ಉದ್ದ ಮತ್ತು
ಹತ್ತು ಸಾವಿರ ಮೊಳ ಅಗಲವಿರುವದು.* ಈ ಎಲ್ಲಾ
ಜಾಗವು ಪರಿಶುದ್ಧವಾದದ್ದು. 2 ಆ ಪ್ರದೇಶದ ಮಧ್ಯ ಭಾಗ
ದಲ್ಲಿ ಐನೂರು ಮೊಳ ಚಚ್ಚೌಕದ ಸ್ಥಳ ದೇವಾಲಯಕ್ಕೆ
ಮೀಸಲಾಗಿದೆ. ಈ ಭಾಗದ ಪರಿಧಿಯ ಉದ್ದಕ್ಕೂ ಐವತ್ತು
ಮೊಳ ಅಗಲದ ಜಾಗವಿರುವದು.

3-4 ಪವಿತ್ರವಾದ ಪ್ರದೇಶದಲ್ಲಿ ಇಪ್ಪತ್ತೈದು ಸಾವಿರ ಮೊಳ
ಉದ್ದದ ಮತ್ತು ಹತ್ತು ಸಾವಿರ ಮೊಳ ಅಗಲದ ಸ್ಥಳವು
ಯಾಜಕರಿಗೆ ಸೇರಬೇಕು. ಅವರು ಯೆಹೋವನ ಸನ್ನಿಧಿಗೆ

---

**ಹತ್ತು ಸಾವಿರ ಮೊಳ ಅಗಲ** ಪುರಾತನ ಗ್ರೀಕ್ ಪ್ರತಿಯಲ್ಲಿ “ಇಪತ್ತು ಸಾವಿರ ಮೊಳ” ಎಂದು ಬರೆದಿದೆ. ಯಾಜಕರಿಗೋಸ್ಕರ ಮತ್ತು ದೇವಾಲಯಕ್ಕೋಸ್ಕರ ಮೀಸಲಾಗಿದ್ದ ಪ್ರದೇಶವನ್ನು ಹೀಬ್ರೂ ಭಾಷೆಯ ಪ್ರತಿಯು ಸೂಚಿಸುತ್ತಿರಬಹುದು. ಯಾಜಕರಿಗೋಸ್ಕರ, ದೇವಾಲಯಕ್ಕೋಸ್ಕರ ಮತ್ತು ಲೇವಿಯರಿಗೋಸ್ಕರ ಮೀಸಲಾಗಿದ್ದ ಪ್ರದೇಶವನ್ನು ಗ್ರೀಕ್ ಪ್ರತಿಯು ಸೂಚಿಸುತ್ತಿರಬಹುದು.

ಹೋಗಿ ಆತನ ಪವಿತ್ರಾಲಯದಲ್ಲಿ ಆತನ ಸೇವೆ ಮಾಡುವು
ದರಿಂದ ಪವಿತ್ರ ಪ್ರದೇಶದ ಈ ಭಾಗವು ಅವರಿಗೋಸ್ಕರ
ವಾಗಿಯೂ ಅವರ ಮನೆಗಳಿಗೋಸ್ಕರವಾಗಿಯೂ ಇರ
ಬೇಕು. ಆಲಯಕ್ಕಾಗಿ ಮೀಸಲಾದ ಐನೂರು ಮೊಳ
ಚಚ್ಚೌಕವಾದ ಜಾಗವು ಈ ಪವಿತ್ರ ಪ್ರದೇಶದೊಳಗಿರ
ಬೇಕು. ಆ ಸ್ಥಳವು ಮಹಾ ಪವಿತ್ರವಾದ ಸ್ಥಳ. ಯಾಕೆಂದರೆ
ಅತ್ಯಂತ ಪವಿತ್ರವಾದ ಆಲಯವು ಅಲ್ಲಿರುತ್ತದೆ. 5ಪವಿತ್ರ
ಪ್ರದೇಶದ ಉಳಿದರ್ಧ ಭಾಗವು ಅಂದರೆ ಇಪ್ಪತ್ತೈದು
ಸಾವಿರ ಮೊಳ ಉದ್ದದ ಮತ್ತು ಹತ್ತು ಸಾವಿರ ಮೊಳ
ಅಗಲದ ಜಾಗವು ಲೇವಿಯರಿಗೆ ಮೀಸಲಾಗಿದೆ. ಅವರು
ವಾಸಿಸುವ ಪಟ್ಟಣವು ಈ ಪ್ರದೇಶದಲ್ಲಿರುತ್ತದೆ.*

6''ಪವಿತ್ರ ಪ್ರದೇಶ ಭಾಗದ ಪಕ್ಕದಲ್ಲಿ ಇಪ್ಪತ್ತೈದು
ಸಾವಿರ ಮೊಳ ಉದ್ದದ ಮತ್ತು ಐದು ಸಾವಿರ ಮೊಳ
ಅಗಲದ ಪ್ರದೇಶ ಭಾಗವು ಸಹ ಇರುತ್ತದೆ. ಇಸ್ರೇಲಿನ
ಉಳಿದೆಲ್ಲ ಜನರಿಗೂ ಈ ಪ್ರದೇಶ ಭಾಗವು ಪಟ್ಟಣ
ವಾಗಿರುತ್ತದೆ. 7ಅಧಿಪತಿಗೆ ಪವಿತ್ರ ಪ್ರದೇಶ ಭಾಗದ
ಎರಡು ಕಡೆಗಳಲ್ಲೂ ಭೂಭಾಗಗಳಿರುವುದು. ಅಂದರೆ
ಪವಿತ್ರ ಪ್ರದೇಶಕ್ಕೆ ಪಶ್ಚಿಮದಲ್ಲಿರುವ ಪಶ್ಚಿಮ ಭಾಗ ಮತ್ತು
ಇಸ್ರೇಲರ ಪಟ್ಟಣದ ಪೂರ್ವಭೂಭಾಗ. ಇದು ಪವಿತ್ರ
ಪ್ರದೇಶದ ಪೂರ್ವಭಾಗದಲ್ಲಿದೆ. ಅಧಿಪತಿಯ ಪಶ್ಚಿಮ
ಭಾಗವು ಪವಿತ್ರ ಪ್ರದೇಶ ಭಾಗದ ಪಶ್ಚಿಮದ ಅಂಚಿನಿಂದ
ಮೆಡಿಟರೇನಿಯನ್ ಸಮುದ್ರದವರೆಗೂ ವಿಸ್ತರಿಸಿದೆ.
ಅಧಿಪತಿಯ ಪೂರ್ವ ಪ್ರದೇಶ ಭಾಗವು ಪೂರ್ವದಿಕ್ಕಿನ
ಪಟ್ಟಣದ ಅಂಚಿನಿಂದ ಪೂರ್ವದ ಗಡಿಯವರೆಗೂ
ವಿಸ್ತರಿಸಿದೆ. 8ಭೂಪ್ರದೇಶದ ಈ ಭಾಗವು ಅಧಿಪತಿಗೆ
ಸೇರಿದೆ. ಹೀಗೆ, ಹಿಂದಿನ ಕಾಲದ ಅಧಿಪತಿಗಳು ಮಾಡಿ
ದಂತೆ ಈ ಅಧಿಪತಿಯು ಜನರನ್ನು ಹಿಂಸಿಸಿ ಅವರ
ಭೂಮಿಯನ್ನು ಕಸಿದುಕೊಳ್ಳುವುದಿಲ್ಲ. ಉಳಿದ ಭೂಭಾ
ಗವು ಇಸ್ರೇಲಿನ ಇತರ ಕುಲಗಳವರಿಗೆ ಯಾವಾಗಲೂ
ಸೇರಿರುತ್ತದೆ.''

9ಇದು ನನ್ನ ಒಡೆಯನಾದ ಯೆಹೋವನ ನುಡಿಗಳು,
''ಇಸ್ರೇಲ್ ಜನರನ್ನು ಆಳುವವರೇ, ಅವರನ್ನು ಕಠಿಣ
ವಾಗಿ ಆಳುವದನ್ನು ನಿಲ್ಲಿಸಿರಿ. ಅವರನ್ನು ಸುಲುಕೊಳ್ಳುವ
ದನ್ನು ನಿಲ್ಲಿಸಿರಿ. ನ್ಯಾಯದಿಂದಿದ್ದು ಒಳ್ಳೇದನ್ನೇ ಮಾಡಿರಿ.
ಅವರನ್ನು ಅವರ ಮನೆಗಳಿಂದ ಹೊರಡಿಸುವದನ್ನು
ನಿಲ್ಲಿಸಿರಿ.'' ಇದು ನನ್ನ ಒಡೆಯನಾದ ಯೆಹೋವನ
ನುಡಿ.

10''ಜನರನ್ನು ಮೋಸಪಡಿಸುವದನ್ನು ನಿಲ್ಲಿಸಿರಿ.
ನ್ಯಾಯವಾದ ಅಳತೆಗಳನ್ನೂ ತ್ರಾಸುಗಳನ್ನೂ ಉಪ
ಯೋಗಿಸಿರಿ. 11ಏಫಾ ಮತ್ತು ಬತ್ ಇವು ಎರಡು ಒಂದೇ
ಅಳತೆಯುಳ್ಳವುಗಳಾಗಿರಬೇಕು. ಬತ್ ಮತ್ತು ಏಫಾ
ಇವರೆಡೂ ಹೋಮೆರಿನ ಹತ್ತನೇ ಒಂದು ಪಾಲು. ಆ
ಅಳತೆಗಳು ಹೋಮೆರಿಗೆ ಹೊಂದಿಕೊಂಡಿರಬೇಕು.
12ಒಂದು ಶೆಕೆಲ್ ಇಪ್ಪತ್ತು ಗೆರಾ ಇರಬೇಕು. ಒಂದು
ಮಿನವು ಅರವತ್ತು ಶೆಕೆಲ್‌ನಷ್ಟು ಇರಬೇಕು. ಅದು
ಇಪ್ಪತ್ತು ಶೆಕೆಲ್ ಮತ್ತು ಇಪ್ಪತ್ತೈದು ಶೆಕೆಲ್ ಮತ್ತು ಹದಿ
ನೈದು ಶೆಖೆಲ್ ಅಷ್ಟಕ್ಕೆ ಸಮಾನವಾಗಿರಬೇಕು.

13''ನೀವು ಸಮರ್ಪಿಸಬೇಕಾದ ವಿಶೇಷ ಕಾಣಿಕೆಯಿದು:

ಒಂದು ಹೋಮೆರ್ ಗೋಧಿಗೆ1/6 ಏಫಾ ಗೋಧಿ
ಕೊಡಬೇಕು; ಒಂದು ಹೋಮರ್ ಬಾರ್ಲಿಗೆ 1/6
ಏಫಾ ಬಾರ್ಲಿ ಕೊಡಬೇಕು;

14 ಒಂದು ಕೋರ್ ಆಲೀವ್ ಎಣ್ಣೆಗೆ 1/10 ಬತ್
ಆಲಿವ್ ಎಣ್ಣೆಯನ್ನು ಕೊಡಬೇಕು; ಹತ್ತು ಬತ್
ಅಂದರೆ ಒಂದು ಹೋಮೆರ್, ಹತ್ತು ಬತ್
ಅಂದರೆ ಒಂದು ಕೋರ್ ಎಂಬುದನ್ನು ಜ್ಞಾಪಕ
ದಲ್ಲಿಡಿರಿ.

15 ಇನ್ನೂರು ಕುರಿಗಳಲ್ಲಿ ಇಸ್ರೇಲಿನ ನೀರಾವರಿಯ
ಹುಲ್ಲುಗಾವಲಿನ ಒಂದು ಕುರಿಯನ್ನು ಕೊಡ
ಬೇಕು.

''ಧಾನ್ಯ ನೈವೇದ್ಯಗಳಿಗೂ, ಸರ್ವಾಂಗಹೋಮ
ಗಳಿಗೂ ಸಮಾಧಾನ ಯಜ್ಞಗಳಿಗೂ ಈ ಕಾಣಿಕೆಗಳನ್ನು
ಕೊಡಬೇಕು. ಜನರನ್ನು ಶುದ್ಧಮಾಡುವವು.'' ನನ್ನ
ಒಡೆಯನಾದ ಯೆಹೋವನ ನುಡಿಗಳಿವು.

16''ಇಸ್ರೇಲಿನಲ್ಲಿರುವ ಪ್ರತಿಯೊಬ್ಬನು ಈ ಕಾಣಿಕೆ
ಯನ್ನು ಇಸ್ರೇಲಿನ ಅಧಿಪತಿಗೆ ಕೊಡಬೇಕು. 17ಆದರೆ
ವಿಶೇಷವಾದ ಹಬ್ಬದ ಆಚರಣೆಗಳಿಗಾಗಿ ಅಧಿಪತಿಯು
ಕಾಣಿಕೆಗಳನ್ನು ಕೊಡಲೇಬೇಕು. ಅಧಿಪತಿಯು ಪಾಪಪರಿ
ಹಾರಕ ಯಜ್ಞಗಳನ್ನೂ ಧಾನ್ಯಾರ್ಪಣೆಗಳನ್ನೂ ಪಾನ
ದ್ರವ್ಯಾರ್ಪಣೆಗಳನ್ನೂ ಕೊಡಬೇಕು. ಈ ಕಾಣಿಕೆಗಳನ್ನು
ಪ್ರತಿಯೊಂದು ಹಬ್ಬದ ದಿನದಲ್ಲಿಯೂ ಅಮಾವಾಸ್ಯೆಯ
ಲ್ಲಿಯೂ ಸಬ್ಬತ್ ದಿನದಲ್ಲಿಯೂ ಇಸ್ರೇಲ್ ಜನಾಂಗದ
ಎಲ್ಲಾ ವಿಶೇಷ ಹಬ್ಬಗಳಲ್ಲಿಯೂ ಅರ್ಪಿಸಬೇಕು.
ಇಸ್ರೇಲ್ ಸಂತತಿಯ ಜನರನ್ನು ಶುದ್ಧೀಕರಿಸುವುದಕ್ಕಾಗಿ
ಅಧಿಪತಿಯು ಈ ಕಾಣಿಕೆಗಳನ್ನು ಕೊಡಬೇಕು.''

18ನನ್ನ ಒಡೆಯನಾದ ಯೆಹೋವನು ಇದನ್ನು ಹೇಳಿ
ದ್ದಾನೆ, ''ಮೊದಲನೇ ತಿಂಗಳಿನ ಮೊದಲನೇ ದಿವಸದಲ್ಲಿ
ಪೂರ್ಣಾಂಗವಾದ ಒಂದು ಎಳೇ ಹೋರಿಯನ್ನು ತೆಗೆದು
ಕೊಂಡು ಅದನ್ನು ಆಲಯದ ಶುದ್ಧೀಕರಣಕ್ಕಾಗಿ ಉಪ
ಯೋಗಿಸಬೇಕು. 19ಪಾಪ ಪರಿಹಾರಕ ಯಜ್ಞಕ್ಕೆ ಬಲಿಯ
ರ್ಪಿಸಿದ್ದ ಪ್ರಾಣಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು

---

**ಅವರು … ಈ ಪ್ರದೇಶದಲ್ಲಿರುತ್ತದೆ.** ಹೀಬ್ರೂ ಪ್ರತಿಯಲ್ಲಿ ''ಈ
ಪ್ರದೇಶದೊಳಗೆ 20 ಭಾಗಗಳು''ಎಂದು ಬರೆದಿದೆ.

ಅದನ್ನು ಆಲಯದ ಬಾಗಿಲಿನ ನಿಲುವು ಕಂಬಗಳಿಗೂ, ಯಜ್ಞವೇದಿಕೆಯ ಸಜ್ಜಾದ ನಾಲ್ಕು ಮೂಲೆಗಳಿಗೂ ಮತ್ತು ಒಳಗಿನ ಪ್ರಾಕಾರದ ಪ್ರವೇಶ ದ್ವಾರದ ಎರಡು ನಿಲುವು ಕಂಬಗಳಿಗೂ ಹಚ್ಚಬೇಕು. [20]ಹೀಗೆಯೇ ತಿಂಗಳಿನ ಏಳನೇ ದಿವಸದಲ್ಲಿಯೂ ಯಾರಾದರೂ ಅಪ್ಪಿತಪ್ಪಿ ಅಥವಾ ತಿಳಿಯದೆ ಪಾಪ ಮಾಡಿದ್ದಲ್ಲಿ ಮಾಡಬೇಕು. ಈ ರೀತಿಯಾಗಿ ಆಲಯವನ್ನು ಶುದ್ಧೀಕರಿಸುವಿರಿ.

### ಪಸ್ಕಹಬ್ಬದ ಸಮಯದಲ್ಲಿ ಕಾಣಿಕೆ ಸಮರ್ಪಣೆ

[21]"ಮೊದಲನೇ ತಿಂಗಳಿನ ಹದಿನಾಲ್ಕನೇ ದಿವಸದಲ್ಲಿ ನೀವು ಪಸ್ಕಹಬ್ಬ ಆಚರಿಸಬೇಕು. ಹುಳಿ ಇಲ್ಲದ ರೊಟ್ಟಿಯ ಹಬ್ಬವು ಈ ಸಮಯದಲ್ಲಿ ಪ್ರಾರಂಭವಾಗುವದು. ಆ ಹಬ್ಬವು ಏಳು ದಿವಸಗಳ ತನಕ ನಡೆಯುವದು. [22]ಆ ಸಮಯದಲ್ಲಿ ಪ್ರಜೆಯನ್ನಾಳುವ ರಾಜನು ತನಗೋಸ್ಕರವಾಗಿಯೂ, ಇಸ್ರೇಲಿನ ಎಲ್ಲಾ ಜನರಿಗೋಸ್ಕರವಾಗಿಯೂ ಒಂದು ಹೋರಿಯನ್ನು ಬಲಿಯರ್ಪಿಸಬೇಕು. ಅದು ಪಾಪಪರಿಹಾರಕ ಯಜ್ಞಕ್ಕಾಗಿ ಸಮರ್ಪಿಸಲ್ಪಡುವದು. [23]ಹಬ್ಬದ ಏಳು ದಿವಸಗಳಲ್ಲಿಯೂ ರಾಜನು ಏಳು ಹೋರಿಗಳನ್ನೂ ಏಳು ಟಗರುಗಳನ್ನೂ ಪಾಪಪರಿಹಾರಕ ಯಜ್ಞಕ್ಕಾಗಿ ಸಮರ್ಪಿಸಬೇಕು. [24]ರಾಜನು ಧಾನ್ಯ ಸಮರ್ಪಣೆಗಾಗಿ ಒಂದು ಏಫಾ ಜವೆಗೋಧಿಯನ್ನು ಹೋರಿಯೊಂದಿಗೂ ಒಂದು ಏಫಾ ಜವೆಗೋಧಿಯನ್ನು ಟಗರಿನೊಂದಿಗೂ ಕೊಡಬೇಕು. ಅದರೊಂದಿಗೆ ರಾಜನು ಪ್ರತೀ ಒಂದು ಏಫಾ ಜವೆಗೋಧಿಯೊಂದಿಗೆ ಒಂದು ಹಿನ್ ಎಣ್ಣೆಯನ್ನೂ ಕೊಡಬೇಕು. [25]ಪರ್ಣಶಾಲೆಗಳ ಹಬ್ಬದ ಏಳು ದಿವಸಗಳಲ್ಲೂ ರಾಜನು ಹಾಗೆಯೇ ಮಾಡಬೇಕು. ಈ ಹಬ್ಬವು ಏಳನೇ ತಿಂಗಳಿನ ಹದಿನೈದನೇ ದಿವಸದಲ್ಲಿ ಪ್ರಾರಂಭವಾಗುವದು. ಈ ಕಾಣಿಕೆಯು ಸರ್ವಾಂಗಹೋಮ, ಪಾಪಪರಿಹಾರಕ ಯಜ್ಞ, ಧಾನ್ಯ ಸಮರ್ಪಣೆ ಮತ್ತು ಎಣ್ಣೆಯ ಸಮರ್ಪಣೆಗಳಿಗಾಗಿ ಅವೆ."

### ರಾಜನೂ ಹಬ್ಬಗಳೂ

46 ನನ್ನ ಒಡೆಯನಾದ ಯೆಹೋವನು ಇಂತೆನ್ನುತ್ತಾನೆ: "ಒಳಗಿನ ಪ್ರಾಕಾರದ ಪೂರ್ವ ದಿಕ್ಕಿನ ದ್ವಾರವು ಆರು ಕೆಲಸದ ದಿವಸಗಳಲ್ಲಿ ಮುಚ್ಚಲ್ಪಡುವದು. ಅದು ಸಬ್ಬತ್ ದಿವಸಗಳಲ್ಲಿಯೂ ಅಮವಾಸ್ಯೆಯ ದಿವಸಗಳಲ್ಲಿಯೂ ತೆರೆಯಲ್ಪಡುವದು. [2]ಅಧಿಪತಿಯು ಆ ದ್ವಾರದ ಕೈಸಾಲೆಯೊಳಗೆ ಪ್ರವೇಶಿಸಿ ಅದರ ನಿಲುವು ಕಂಬದ ಬಳಿಯಲ್ಲಿ ನಿಲ್ಲುವನು. ಅಧಿಪತಿಯು ಕೊಡುವ ಸರ್ವಾಂಗ ಹೋಮವನ್ನು ಮತ್ತು ಸಮಾಧಾನ ಯಜ್ಞವನ್ನು ಆಗ ಯಾಜಕರು ಸಮರ್ಪಿಸುವರು. ಅಧಿಪತಿಯು ಆ ದ್ವಾರದ ಮುಂಭಾಗದಲ್ಲಿ ಆರಾಧಿಸುವನು. ಅನಂತರ ಅವನು ಹೊರಗೆ ಹೋಗುವನು. ಆ ದ್ವಾರದ ಕದಗಳು ಸಾಯಂಕಾಲದ ತನಕ ತೆರೆದೇ ಇರುವವು. [3]ಸಬ್ಬತ್ ಮತ್ತು ಅಮಾವಾಸ್ಯೆ ದಿವಸಗಳಲ್ಲಿ ಸಾಮಾನ್ಯ ಜನರೂ ಅದೇ ದ್ವಾರದ ಬಳಿ ಆರಾಧಿಸುವರು.

[4]"ಸಬ್ಬತ್ ದಿವಸದಲ್ಲಿ ರಾಜನು ಯೆಹೋವನಿಗೆ ಸರ್ವಾಂಗಹೋಮವನ್ನು ಸಮರ್ಪಿಸುವನು. ಅವನು ಅದಕ್ಕಾಗಿ ನಿಷ್ಕಳಂಕವಾದ ಆರು ಕುರಿಗಳನ್ನೂ ನಿಷ್ಕಳಂಕವಾದ ಒಂದು ಟಗರನ್ನೂ ಕೊಡಬೇಕು. [5]ಟಗರಿನೊಂದಿಗೆ ಒಂದು ಏಫಾ ಧಾನ್ಯಸಮರ್ಪಣೆಗಾಗಿ ಕೊಡಬೇಕು. ಕುರಿಗಳೊಂದಿಗೆ ಧಾನ್ಯ ಸಮರ್ಪಣೆಗಾಗಿ ರಾಜನು ತನ್ನ ಇಷ್ಟ ಬಂದ ಹಾಗೆ ಕೊಡಬಹುದು. ಆದರೆ ಪ್ರತೀ ಒಂದು ಏಫಾ ಧಾನ್ಯದೊಂದಿಗೆ ಒಂದು ಹಿನ್ ಆಲಿವ್ ಎಣ್ಣೆಯನ್ನು ಕೊಡಬೇಕು.

[6]"ಅಮಾವಾಸ್ಯೆ ದಿವಸ ಅವನು ಒಂದು ಎಳೇ ಪೂರ್ಣಾಂಗವಾದ ಹೋರಿಯನ್ನು ಸಮರ್ಪಿಸಬೇಕು. ಅದರ ಜೊತೆಗೆ ಆರು ಪೂರ್ಣಾಂಗವಾದ ಕುರಿಗಳನ್ನೂ ಒಂದು ಪೂರ್ಣಾಂಗವಾದ ಟಗರನ್ನೂ ಸಮರ್ಪಿಸಬೇಕು. [7]ರಾಜನು ಒಂದು ಏಫಾ ಧಾನ್ಯವನ್ನು ಹೋರಿಯೊಂದಿಗೂ ಇನ್ನೊಂದು ಏಫಾ ಧಾನ್ಯವನ್ನು ಟಗರಿನೊಂದಿಗೂ ಕೊಡಬೇಕು. ಆದರೆ ಅಧಿಪತಿಯು ಕುರಿಗಳೊಂದಿಗೆ ತನಗಿಷ್ಟವಾದಷ್ಟು ಧಾನ್ಯ ಸಮರ್ಪಣೆಯನ್ನು ಕೊಡಬಹುದು. ಆದರೆ ಅವನು ಪ್ರತೀ ಒಂದು ಏಫಾ ಧಾನ್ಯಕ್ಕೆ ಒಂದು ಹಿನ್ ಆಲಿವ್ ಎಣ್ಣೆಯನ್ನು ಕೊಡಲೇಬೇಕು. [8]ಅಧಿಪತಿಯು ಆಲಯದ ಸಂಕೀರ್ಣ ಪ್ರವೇಶಿಸುವಾಗ ಅವನು ಪೂರ್ವದಿಕ್ಕಿನ ದ್ವಾರದಿಂದ ಪ್ರವೇಶಿಸಬೇಕು. ಮತ್ತು ಅದರ ಮೂಲಕವೇ ಅವನು ಹೊರಗೆ ಹೋಗಬೇಕು.

[9]"ಸಾಮಾನ್ಯ ಜನರು ವಿಶೇಷ ಹಬ್ಬದ ದಿವಸಗಳಲ್ಲಿ ಯೆಹೋವನನ್ನು ಸಂಧಿಸಲು ಬರುವಾಗ ಉತ್ತರ ದ್ವಾರದಿಂದ ಬರುವವರು ದಕ್ಷಿಣ ದ್ವಾರದ ಮೂಲಕ ಹೊರಗೆ ಹೋಗಬೇಕು. ದಕ್ಷಿಣದ ದ್ವಾರದಿಂದ ಒಳ ಪ್ರವೇಶಿಸುವವನು ಉತ್ತರ ದ್ವಾರದ ಮೂಲಕ ಹೊರಗೆ ಹೋಗಬೇಕು. ಯಾರೂ ಬಂದ ದಾರಿಯಿಂದ ಹಿಂದೆ ಹೋಗಬಾರದು. ಪ್ರತಿಯೊಬ್ಬನೂ ನೇರವಾಗಿ ಮುಂದಕ್ಕೆ ಹೋಗಬೇಕು. [10]ರಾಜನು ತನ್ನ ಜನರೊಂದಿಗೆ ಇರಬೇಕು. ಜನರು ಒಳಗೆ ಪ್ರವೇಶ ಮಾಡುವಾಗ ಅವನೂ ಅವರ ಜೊತೆಯಲ್ಲಿರಬೇಕು. ಅವರು ಹೊರಗೆ ಹೋಗುವಾಗಲೂ ಅವನು ಅವರ ಜೊತೆಯಲ್ಲಿರಬೇಕು.

[11]"ಹಬ್ಬದ ದಿವಸಗಳಲ್ಲಿ ಮತ್ತು ಬೇರೆ ವಿಶೇಷ ದಿವಸಗಳಲ್ಲಿ ಪ್ರತೀ ಎಳೇ ಹೋರಿಯೊಂದಿಗೆ ಒಂದು ಏಫಾ ಧಾನ್ಯ ಸಮರ್ಪಣೆಯನ್ನು ಸಮರ್ಪಿಸಬೇಕು. ಮತ್ತು

ಪ್ರತಿ ಒಂದು ಟಗರಿನೊಂದಿಗೆ ಒಂದು ಏಫಾ ಧಾನ್ಯವನ್ನು ಸಮರ್ಪಿಸಬೇಕು. ಕುರಿಗಳೊಂದಿಗೆ ಸಮರ್ಪಿಸಬೇಕಾದ ಧಾನ್ಯವು ರಾಜನಿಗೆ ಇಷ್ಟದ ಪ್ರಕಾರ ಇರುವದು. ಅದರ ಜೊತೆಗೆ ಒಂದು ಏಫಾ ಧಾನ್ಯದೊಂದಿಗೆ ಒಂದು ಹಿನ್ ಎಣ್ಣೆಯನ್ನೂ ಕೊಡಬೇಕು.

12‘‘ರಾಜನು ತನ್ನ ಇಚ್ಛೆಯ ಪ್ರಕಾರ ಯೆಹೋವನಿಗೆ, ಸರ್ವಾಂಗಹೋಮ, ಅಥವಾ ಸಮಾಧಾನ ಯಜ್ಞ ಅಥವಾ ಮನಃಪೂರ್ವಕವಾದ ಕಾಣಿಕೆಯನ್ನು ಸಮರ್ಪಿಸುವಾಗ ಅವನಿಗಾಗಿ ಪೂರ್ವದ ಬಾಗಿಲು ತೆಗೆಯಲ್ಪಡಬೇಕು. ಆದರೆ ಅವನು ಸಬ್ಬತ್ ದಿನದಂತೆ ತನ್ನ ಕಾಣಿಕೆಗಳನ್ನು ಸಮರ್ಪಿಸಿದ ನಂತರ ಅವನು ಹಿಂತಿರುಗಿದಾಗ ಪ್ರವೇಶ ದ್ವಾರವು ಮುಚ್ಚಲ್ಪಡಬೇಕು.

### ದೈನಂದಿನ ಸಮರ್ಪಣೆ

13‘‘ನೀನು ಪ್ರತಿದಿನ ಮುಂಜಾನೆ ಒಂದು ವರ್ಷದ
ಪೂರ್ಣಾಂಗವಾದ ಕುರಿಯನ್ನು ಸರ್ವಾಂಗಹೋಮವಾಗಿ
ಯೆಹೋವನಿಗೆ ಸಮರ್ಪಿಸಬೇಕು. 14ಪ್ರತಿ ಮುಂಜಾನೆ
ನೀನು ಐದು ಸೇರು ಗೋಧಿಹಿಟ್ಟನ್ನೂ ಎರಡು ಸೇರು
ಎಣ್ಣೆಯನ್ನೂ ಒಟ್ಟಾಗಿ ಬೆರೆಸಿ ಪ್ರತಿದಿನ ಯೆಹೋವನಿಗೆ
ದಾನ್ಯ ನೈವೇದ್ಯವಾಗಿ ಸಮರ್ಪಿಸಬೇಕು.15ಹೀಗೆ ಅವರು
ಕುರಿ, ಧಾನ್ಯ ಮತ್ತು ಎಣ್ಣೆಯನ್ನು ಪ್ರತೀ ಮುಂಜಾನೆ ಸರ್ವಾಂಗ ಹೋಮವಾಗಿ ಸಮರ್ಪಿಸಬೇಕು. ಇದು ಶಾಶ್ವತವಾದ ನಿಯಮ.’’

### ರಾಜನ ಸ್ವಾಸ್ತ್ಯದ ಬಗ್ಗೆ ಕಟ್ಟಳೆಗಳು

16ನನ್ನ ಒಡೆಯನಾದ ಯೆಹೋವನು ಹೇಳಿದ್ದೇ
ನೆಂದರೆ, ‘‘ಒಬ್ಬ ರಾಜನು ತನ್ನ ಗಂಡುಮಕ್ಕಳಿಗೆ ತನ್ನ ಭೂಮಿಯ ಭಾಗವನ್ನು ಉಚಿತವಾಗಿ ಕೊಟ್ಟರೆ ಅದು ಅವನ ಗಂಡು ಮಕ್ಕಳಿಗೆ ಸೇರುವದು. ಅದು ಅವರ ಆಸ್ತಿ
ಯಾಗುವದು. 17ಆದರೆ ಆ ರಾಜನು ತನ್ನ ಭೂಮಿಯ
ಒಂದು ಭಾಗವನ್ನು ತನ್ನ ದಾಸನಿಗೆ ಉಚಿತವಾಗಿ ಕೊಟ್ಟರೆ, ಆ ಭೂಮಿಯು ಬಿಡುಗಡೆ ಸಂವತ್ಸರದ ತನಕ ಮಾತ್ರವೇ ದಾಸನದ್ದಾಗಿರುವದು. ಅನಂತರ ಅದು ರಾಜನಿಗೆ ಹಿಂದೆ ಹೋಗುವದು. ರಾಜನ ಗಂಡು ಮಕ್ಕಳು ಮಾತ್ರ ರಾಜ ನಿಂದ ಹೊಂದಿದ ಭೂಮಿಯನ್ನು ನಿತ್ಯಕಾಲಕ್ಕೂ ಅನು
ಭೋಗಿಸುವರು. 18ರಾಜನು ತನ್ನ ಪ್ರಜೆಯ ಭೂಮಿ
ಯನ್ನು ತನ್ನ ಉಪಯೋಗಕ್ಕೆಂದು ಬಲತ್ಕಾರದಿಂದ ಇಟ್ಟು ಕೊಳ್ಳಬಾರದು ಅಥವಾ ತೆಗೆದುಕೊಳ್ಳಲೂಬಾರದು. ತನ್ನ ಸ್ವಂತ ಭೂಮಿಯಿಂದ ಪಾಲನ್ನು ತನ್ನ ಮಕ್ಕಳಿಗೆ ಕೊಡ ಬೇಕು. ಹೀಗೆ ನನ್ನ ಜನರು ತಮ್ಮ ಭೂಮಿಯನ್ನು ಕಳೆದು ಕೊಳ್ಳುವದಿಲ್ಲ.’’

### ವಿಶೇಷ ಅಡಿಗೆಮನೆ

19ಬಳಿಕ ಆ ಪುರುಷನು ನನ್ನನ್ನು ಮಹಾದ್ವಾರದ ಪಕ್ಕ
ದಲ್ಲಿನ ಪ್ರವೇಶಮಾರ್ಗವಾಗಿ ಉತ್ತರದಲ್ಲಿರುವ ಯಾಜಕರ ಪವಿತ್ರ ಕೋಣೆಗಳಿಗೆ ಕರೆದುಕೊಂಡು
ಹೋದನು. 20ಅವನು ನನಗೆ ಹೇಳಿದ್ದೇನೆಂದರೆ, ‘‘ಈ
ಸ್ಥಳದಲ್ಲಿ ಯಾಜಕರು ದೋಷಪರಿಹಾರಕ ಮತ್ತು ಪಾಪ ಪರಿಹಾರಕ ಯಜ್ಞದ ಮಾಂಸಗಳನ್ನು ಬೇಯಿಸುವರು. ಇದೇ ಸ್ಥಳದಲ್ಲಿ ಧಾನ್ಯ ಸಮರ್ಪಣೆಯ ಹಿಟ್ಟಿನಿಂದ ರೊಟ್ಟಿ ಯನ್ನು ಸುಡುವರು. ಇದನ್ನು ಇಲ್ಲಿಯೇ ಯಾಕೆ ಮಾಡುತ್ತಾರೆಂದರೆ ಅವರು ಹೊರಗಿನ ಪ್ರಾಕಾರದೊಳಗೆ ಆ ಪವಿತ್ರ ವಸ್ತುವನ್ನು ತರುವ ಅವಶ್ಯಕತೆ ಇರುವದಿಲ್ಲ. ಸಾರ್ವಜನಿಕರು ಕೂಡುವ ಸ್ಥಳದಲ್ಲಿ ಆ ಪವಿತ್ರ ವಸ್ತುವನ್ನು ತರಬಾರದು.’’

21ಆಮೇಲೆ ಅವನು ಹೊರಗಿನ ಪ್ರಾಕಾರಕ್ಕೆ ಕರೆದು
ಕೊಂಡು ಹೋದನು. ಆ ಪ್ರಾಕಾರದ ನಾಲ್ಕು ಮೂಲೆ ಗಳಿಗೆ ನನ್ನನ್ನು ಕರೆದುಕೊಂಡು ಹೋದನು. ವಿಶಾಲ ವಾದ ಪ್ರಾಕಾರದ ಪ್ರತೀ ಮೂಲೆಗಳಲ್ಲಿ ಇನ್ನೊಂದು ಚಿಕ್ಕ
ಪ್ರಾಕಾರವಿರುವದನ್ನು ಕಂಡೆನು. 22ಆ ನಾಲ್ಕು ಮೂಲೆ
ಗಳಲ್ಲಿಯೂ ಗೋಡೆಗಳಿಂದ ಆವರಿಸಲ್ಪಟ್ಟಿದ್ದ ಒಂದು ಚಿಕ್ಕ ಪ್ರಾಕಾರವಿತ್ತು. ಈ ಪ್ರಾಕಾರದ ಉದ್ದ ನಾಲ್ವತ್ತು ಮೊಳ ಮತ್ತು ಅಗಲ ಮೂವತ್ತು ಮೊಳ . ಈ ನಾಲ್ಕು ಚಿಕ್ಕ ಪ್ರಾಕಾರಗಳು ಒಂದೇ ಅಳತೆಯುಳ್ಳವುಗಳಾಗಿದ್ದವು.
23ಇವುಗಳ ಸುತ್ತಲೂ ಇಟ್ಟಿಗೆಯ ಗೋಡೆ ಕಟ್ಟಲ್ಪಟ್ಟಿತ್ತು.
ಈ ಗೋಡೆಯೊಳಗೆ ಅಡಿಗೆ ಮಾಡುವದಕ್ಕಾಗಿ ಸ್ಥಳವನ್ನು
ಏರ್ಪಡಿಸಲಾಗಿತ್ತು. 24ಅವನು ನನಗೆ ಹೇಳಿದ್ದೇನೆಂದರೆ,
‘‘ಈ ಸ್ಥಳದ ಆಲಯದಲ್ಲಿ ಸೇವೆ ಮಾಡುವ ಜನರು ಸಾಮಾನ್ಯ ಜನರ ಯಜ್ಞದ ಮಾಂಸವನ್ನು ಆ ಜನರಿಗಾಗಿ ಬೇಯಿಸುವರು.’’

### ಆಲಯದಿಂದ ನೀರಿನ ಹರಿಯುವಿಕೆ

47 ಅವನು ಆಲಯದ ಪ್ರವೇಶ ದ್ವಾರಕ್ಕೆ ನನ್ನನ್ನು
ಕರೆದುಕೊಂಡು ಹೋದನು. ನಾನು ಅಲ್ಲಿ ಆಲಯದ ಪೂರ್ವ ದ್ವಾರದ ಕೆಳಗಡೆಯಿಂದ ಹರಿಯುವ ನೀರನ್ನು ಕಂಡೆನು. ಆಲಯದ ಮುಂಭಾಗ ಪೂರ್ವ ದಿಕ್ಕಿನಲ್ಲಿದೆ. ಆ ನೀರು ಆಲಯದ ದಕ್ಷಿಣದ ಭಾಗದ ಕೆಳಗಿನಿಂದ ಹರಿಯುತ್ತಾ ಯಜ್ಞವೇದಿಯ ದಕ್ಷಿಣದ ಕಡೆಗೆ
ಹರಿಯುತ್ತಿತ್ತು. 2ಅವನು ನನ್ನನ್ನು ಉತ್ತರದ ದ್ವಾರದಿಂದ
ಹೊರಕ್ಕೆ ತಂದು, ದೇವಾಲಯದ ಹೊರ ಅಂಚಿನಲ್ಲಿಯೇ ಪೂರ್ವ ದ್ವಾರಕ್ಕೆ ತಂದನು. ಆ ಪೂರ್ವದ್ವಾರದ ಕೆಳಗೆ ನೀರು ಹರಿದು ಬರುತ್ತಿತ್ತು.

3ಅವನು ಕೈಯಲ್ಲಿ ಅಳತೆಯ ನೂಲನ್ನು ಹಿಡಿದು
ಕೊಂಡು ಪೂರ್ವದ ಕಡೆಗೆ ನಡೆದನು. ಅವನು ಸಾವಿರ

ಮೊಳ ಅಳೆದನು. ನನ್ನನ್ನು ಆ ಸ್ಥಳದಲ್ಲಿ ನೀರಿನಲ್ಲಿ ನಡೆದು
ಕೊಂಡು ಬರುವಂತೆ ಹೇಳಿದನು. ನೀರು ನನ್ನ ಪಾದ
ಮುಳುಗುವಷ್ಟು ಆಳವಿತ್ತು. 4ಅವನು ತಿರುಗಿ ಸಾವಿರ
ಮೊಳ ಅಳೆದನು. ಆ ಜಾಗದಲ್ಲಿದ್ದ ನೀರಿನಲ್ಲಿ ನನಗೆ ನಡೆ
ಯಲು ಹೇಳಿದನು. ಅಲ್ಲಿ ನೀರು ನನ್ನ ಮೊಣಕಾಲಿನಷ್ಟು
ಆಳವಿತ್ತು. ತಿರುಗಿ ಅವನು ಸಾವಿರ ಮೊಳದಷ್ಟು ದೂರ
ಅಳತೆ ಮಾಡಿದನು. ಆ ಸ್ಥಳದಲ್ಲಿ ನೀರಿನಲ್ಲಿ ನಡೆಯಲು
ಹೇಳಿದನು. ಅಲ್ಲಿ ನೀರು ನನ್ನ ಸೊಂಟದಷ್ಟು ಆಳ
ವಾಗಿತ್ತು. 5ಅವನು ಇನ್ನೂ ಒಂದು ಸಾವಿರ ಮೊಳ ದೂರ
ಅಳೆದನು. ಅಲ್ಲಿ ನೀರು ಹೆಚ್ಚಿದ್ದು ನನ್ನಿಂದ ದಾಟಲು
ಆಗದಷ್ಟು ಆಳವಿತ್ತು. ಅದು ನದಿಯಾಗಿತ್ತು. ಆ ನೀರಿನಲ್ಲಿ
ಈಜಾಡುಬಹುದಾಗಿತ್ತು. ದಾಟಲಾಗದ ಆಳವಾದ
ಹೊಳೆಯಾಗಿತ್ತು. 6ಆಗ ಅವನು ನನ್ನ ಕೂಡ, ''ನರ
ಪುತ್ರನೇ, ನೀನು ನೋಡಿರುವ ವಿಷಯಗಳ ಬಗ್ಗೆ ನೀನು
ಗಮನವಿಟ್ಟೆಯಾ?''

ಆಗ ಅವನು ನನ್ನನ್ನು ಹೊಳೆಯ ಪಕ್ಕದಲ್ಲೇ ಕರೆದು
ಕೊಂಡು ಹೋದನು. 7ನಾನು ನದಿಯ ತೀರದಲ್ಲಿ ನಡೆಯ
ುತ್ತಿರುವಾಗ ಅದರ ಎರಡೂ ಕಡೆಗಳಲ್ಲಿ ಲೆಕ್ಕವಿಲ್ಲದಷ್ಟು
ಮರಗಳನ್ನು ನೋಡಿದೆನು. 8ಅವನು ನನ್ನೊಡನೆ, ''ಈ
ನದಿಯು ಪೂರ್ವಕ್ಕೆ ಹೊರಟು ಅರಾಬಾ ತಗ್ಗಿನ ಕಡೆ ಹರಿ
ಯುತ್ತಿದೆ. 9ಇದು ಮೃತ್ಯು ಸಮುದ್ರವನ್ನು ಸೇರಿದಾಗ
ಇದರ ನೀರು ಶುದ್ಧವಾಗುವದು. ಈ ನೀರು ಆ ಸಮುದ್ರ
ವನ್ನು ಸೇರಿದಾಗ ಅದರ ನೀರು ಹೊಸತಾಗಿ ಶುದ್ಧ
ವಾಗುವದು. ನೀರಿನಲ್ಲಿ ನಾನಾ ತರದ ಮೀನುಗಳು
ಜೀವಿಸುವವು. ಮತ್ತು ಈ ಹೊಳೆಯು ಹರಿಯುವಲ್ಲೆಲ್ಲಾ
ವಿವಿಧ ಜಾತಿಯ ಪ್ರಾಣಿಗಳು ವಾಸಿಸುವವು. 10ಎಂಗೇದಿ
ಯಿಂದ ಪ್ರಾರಂಭವಾಗಿ ಏನ್ಎಗ್ಲಯಿಮ್ ತನಕ ಬೆಸ್ತರು
ಹೊಳೆಯ ದಡದಲ್ಲಿ ನಿಂತಿರುವದನ್ನು ನೀನು ನೋಡ
ಬಹುದು. ಅವರು ತಮ್ಮ ಬಲೆಗಳನ್ನು ಬೀಸಿ ನಾನಾ ತರದ
ಮೀನುಗಳನ್ನು ಹಿಡಿಯುವದನ್ನು ನೀನು ನೋಡ
ಬಹುದು. ಭೂಮಧ್ಯ ಸಮುದ್ರದೊಳಗೆ ಎಷ್ಟು ವಿಧವಾದ
ಮೀನುಗಳಿವೆಯೋ ಅಷ್ಟೇ ವಿಧವಾದ ಮೀನುಗಳು ಈ
ಹೊಳೆಯಲ್ಲಿಯೂ ಇವೆ .

11''ಆದರೆ ನೀರಾವರಿ ನೆಲಗಳೂ, ಜವುಗು ಸ್ಥಳಗಳೂ
ತಾಜಾ ಆಗುವದಿಲ್ಲ. ಅವು ಉಪ್ಪು ತಯಾರಿಸುವದಕ್ಕಾಗಿ
ಉಪಯೋಗಿಸಲ್ಪಡುವವು.

12''ಎಲ್ಲಾ ತರಹದ ಹಣ್ಣಿನ ಮರಗಳು ನದಿಯ ಇಕ್ಕೆಡೆಗ
ಳಲ್ಲಿಯೂ ಬೆಳೆಯುವವು. ಅವುಗಳ ಎಲೆಗಳು ಎಂದಿಗೂ
ಒಣಗಿ ನೆಲಕ್ಕೆ ಉದುರವು. ಆ ಮರಗಳಲ್ಲಿ ಸದಾಕಾಲ
ಹಣ್ಣುಗಳು ಇರುವವು. ಪ್ರತೀ ತಿಂಗಳಿಗೆ ಹಣ್ಣನ್ನು ಕೊಡು
ವವು. ಯಾಕೆಂದರೆ ಆ ಮರಗಳಿಗೆ ನೀರು ಆಲಯದಿಂದ
ಬರುತ್ತದೆ. ಆದರ ಹಣ್ಣುಗಳನ್ನು ಆಹಾರಕ್ಕಾಗಿಯೂ
ಅದರ ಎಲೆಗಳಿಂದ ಔಷಧಿಯನ್ನೂ ತಯಾರಿಸ
ಬಹುದು.''

### ವಂಶಕ್ಕನುಸಾರವಾಗಿ ದೇಶದ ವಿಭಜನೆ

13ನನ್ನ ಒಡೆಯನಾದ ಯೆಹೋವನು ಹೇಳುವದೇ
ನೆಂದರೆ, ''ಇಸ್ರೇಲರ ಹನ್ನೆರಡು ಗೋತ್ರಗಳಿಗೆ ದೇಶ
ವನ್ನು ವಿಂಗಡಿಸುವಾಗ ಅವುಗಳ ಮೇರೆ ಯಾವುವೆಂದರೆ,
ಯೋಸೇಫನಿಗೆ ಎರಡು ಪಾಲು ಇರುವದು. 14ನೀನು
ದೇಶವನ್ನು ಸಮಾನವಾಗಿ ಪಾಲು ಮಾಡಬೇಕು. ನಾನು
ನಿಮ್ಮ ಪೂರ್ವಿಕರಿಗೆ ಈ ದೇಶವನ್ನು ಕೊಡುತ್ತೇನೆಂದು
ವಾಗ್ದಾನ ಮಾಡಿದ್ದೆನು. ಈಗ ನಾನು ಇದನ್ನು ನಿಮಗೆ
ಕೊಡುತ್ತಿದ್ದೇನೆ.

15''ದೇಶದ ಮೇರೆ ಯಾವದೆಂದರೆ, ಉತ್ತರದ
ಮೇರೆಯು ಭೂಮಧ್ಯ ಸಮುದ್ರದಲ್ಲಿ ಪ್ರಾರಂಭವಾಗಿ
ಹೆತ್ಲೋನ್ ಕಡೆಗೂ ಅಲ್ಲಿಂದ ಚೆದಾದ್ ಕಡೆಗೂ
16ಅಲ್ಲಿಂದ ಬೇರೋತ ಕಡೆಗೂ ಅಲ್ಲಿಂದ ಸಿಬ್ರಯಿಮ್
(ಇದು ದಮಸ್ಕ ಮತ್ತು ಹಾಮತ್‌ಗಳ ಮೇರೆಯಲ್ಲಿದೆ)
ಕಡೆಗೂ ಅಲ್ಲಿಂದ ಹಾಚೇರ್ ಕಡೆಗೂ ಅಲ್ಲಿಂದ
ಹತ್ತೀಕೋನ್ (ಇದು ಹವಾನದ ಮೇರೆಯಲ್ಲಿದೆ)
ಕಡೆಗೂ ಹೋಗುತ್ತದೆ. 17ಹೀಗೆ ಉತ್ತರದ ಮೇರೆಯು
ಸಮುದ್ರದಿಂದ ದಮಸ್ಕದ ಉತ್ತರದ ಗಡಿಯಾದ ಹಚರ್
ಐನೋನ್ ಮತ್ತು ಹಮಾತಿಗೆ ಸೇರ್ಪಡೆಯಾಗುವದು.
ಇದು ಉತ್ತರ ಭಾಗದ ಮೇರೆ.

18''ಪೂರ್ವ ಭಾಗದಲ್ಲಿ, ಮೇರೆಯು ಹವ್ರಾನ್ ಮತ್ತು
ದಮಸ್ಕದ ಮಧ್ಯದಲ್ಲಿರುವ ಹಚರ್ ಐನೋನ್ ಇಲ್ಲಿಂದ
ಹೊರಟು ಜೋರ್ಡನ್ ಹೊಳೆಯ ತೀರದಲ್ಲಿ ಮುಂದು
ವರಿದು ಗಿಲ್ಯಾದಿಗೂ ಇಸ್ರೇಲ್ ರಾಜ್ಯಕ್ಕೂ ಮಧ್ಯದಲ್ಲಿ
ಹರಿದು ಪೂರ್ವದ ಸಮುದ್ರದ ಕಡೆಗೆ ಹೋಗುತ್ತದೆ.
ಅಲ್ಲಿಂದ ತಾಮಾರಿಗೆ ಸೇರುತ್ತದೆ. ಇದು ಪೂರ್ವ ಕಡೆಯ
ಮೇರೆ.

19''ದಕ್ಷಿಣದಲ್ಲಿ ತಾಮಾರಿನಿಂದ ಮೇರೆಯು ಹೊರಟು
ಮೆರೀಬೋತ್ ಕಾದೇಶ್ ಎಂಬಲ್ಲಿಯ ಮರು
ಭೂಮಿಯ ಹಸುರು ಜಾಗದಿಂದ ಈಜಿಪ್ಟಿನ ನೀರಿನ
ತೋಡಿನ ಬದಿಯಿಂದ ಭೂಮಧ್ಯ ಸಮುದ್ರವನ್ನು ಸೇರು
ವದು. ಇದು ದಕ್ಷಿಣದ ಮೇರೆ. 20ಪಶ್ಚಿಮದಲ್ಲಿ ಲೆಬೊ
ಹಮಾತ್ ಎಂಬ ಸ್ಥಳದ ಮುಂಭಾಗದಲ್ಲಿರುವ ಸಮುದ್ರ
ತೀರವೇ ಪಶ್ಚಿಮ ದಿಕ್ಕಿನ ಮೇರೆಯಾಗಿರುತ್ತದೆ.

21'' ಈ ದೇಶವನ್ನು ನಿಮ್ಮ ವಂಶಕ್ಕನುಸಾರವಾಗಿ ನೀವು
ವಿಂಗಡಿಸಬೇಕು. 22ನೀವು ಇದನ್ನು ಸ್ವಂತ ಸ್ವಾಸ್ತ್ಯಕ್ಕಾಗಿ
ವಿಂಗಡಿಸಬೇಕು. ನಿಮಗೂ ನಿಮ್ಮ ಮಧ್ಯೆ ವಾಸಿಸುವ ಪರ
ದೇಶದವರೂ ಅವರ ಮಕ್ಕಳೂ ನಿಮ್ಮೊಂದಿಗಿದ್ದಾರಲ್ಲಾ?
ಈ ಪರದೇಶಸ್ಥರು ಈ ದೇಶದ ನಿವಾಸಿಗಳಾಗಿರುವರು.

ಅವರು ಇಲ್ಲಿಯೇ ಹುಟ್ಟಿ ಇಲ್ಲಿಯೇ ಬೆಳೆದ ಇಸ್ರೇಲಿ
ನವರಂತಿರುತ್ತಾರೆ. ನೀವು ಅವರಿಗೂ ನಿಮ್ಮ ವಂಶದವ
ರೊಂದಿಗೆ ಭೂಮಿಯನ್ನು ಕೊಡಬೇಕು. 23ಯಾವ ಕುಲ
ದವರೊಂದಿಗೆ ಆ ಪರದೇಶಸ್ಥನು ವಾಸವಾಗಿರುತ್ತಾನೋ
ಅದೇ ಕುಲದವರು ಅವನಿಗೆ ನೆಲವನ್ನು ಕೊಡಬೇಕು.''
ಇದು ನನ್ನ ಒಡೆಯನಾದ ಯೆಹೋವನ ನುಡಿ.

### ಇಸ್ರೇಲಿನ ವಿವಿಧ ವಂಶದವರಿಗೆ ಸ್ವಾಸ್ತ್ಯ

48 1-7''ಉತ್ತರದ ಮೇರೆಯು ಭೂಮಧ್ಯ
ಸಮುದ್ರದಿಂದ ಪೂರ್ವಕ್ಕೆ ಹೋಗಿ ಅಲ್ಲಿಂದ
ಹೆತ್ಲೋನಿಗೂ ಅಲ್ಲಿಂದ ಹಮಾತ್ ಕಣಿವೆಗೂ ಅಲ್ಲಿಂದ
ಹಚರ್ ಏನಾನಿಗೂ ಹೋಗುವುದು. ಈ ಸ್ಥಳವು
ಹಮಾತ್ ಮತ್ತು ದಮಸ್ಕಸ್‌ನ ಗಡಿಯಲ್ಲಿರುವದು.
ಪೂರ್ವದ ಗಡಿಯಿಂದ ಪಶ್ಚಿಮದ ತನಕ ಹೋಗುವ ಈ
ಪ್ರಾಂತ್ಯದಲ್ಲಿ ಇಸ್ರೇಲಿನ ದಾನ್, ಅಶೇರ್, ನಫ್ತಾಲಿ,
ಮನಸ್ಸೆ, ಎಫ್ರಾಯೀಮ್ ರೂಬೇನ್ ಮತ್ತು ಯೆಹೂದ
ವಂಶದ ಜನರಿಗೆ ಭೂಮಿಯು ಸಿಗುವದು.

### ದೇಶದ ವಿಶೇಷವಾದ ಭಾಗ

8''ಆ ಯೆಹೂದದ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ
ಪಶ್ಚಿಮದವರೆಗೆ ನೀವು ಮೀಸಲಾಗಿಡಬೇಕಾದ ಭೂಮಿ
ಯಿದೆ. ಇದರ ಅಗಲ ಇಪ್ಪತ್ತೈದು ಸಾವಿರ ಮೊಳ. ಇದರ
ಉದ್ದವು ಪೂರ್ವದಿಂದ ಪಶ್ಚಿಮದ ತನಕ ಇರುವ ಬೇರೆ
ವಂಶದವರ ಸ್ವಾಸ್ತ್ಯದ ಭೂಮಿಯಷ್ಟಿರುವುದು. ಆಲಯವು
ಈ ವಿಶೇಷವಾದ ಪ್ರಾಂತ್ಯದ ಮಧ್ಯದಲ್ಲಿರುವದು. 9ಈ
ಭೂಮಿಯನ್ನು ನೀನು ಯೆಹೋವನಿಗಾಗಿ ಪ್ರತಿಷ್ಠಿಸ
ಬೇಕು. ಇದು ಇಪ್ಪತ್ತೈದು ಸಾವಿರ ಮೊಳ ಉದ್ದ ಮತ್ತು
ಇಪ್ಪತ್ತು ಸಾವಿರ ಮೊಳ ಅಗಲವಾಗಿರುವದು. 10ಈ
ವಿಶೇಷವಾದ ಭೂಮಿಯನ್ನು ವಿಭಾಗಿಸಿ ಯಾಜಕರಿಗೆ
ಮತ್ತು ಲೇವಿಯರಿಗೆ ಕೊಡಲಾಗುವುದು.

''ಯಾಜಕರು ಆ ಪ್ರದೇಶದ ಒಂದು ಭಾಗವನ್ನು
ಪಡೆದುಕೊಳ್ಳುವರು. ಆ ಭಾಗದ ಉದ್ದವು ಉತ್ತರದಿಕ್ಕಿಗೆ
ಇಪ್ಪತ್ತೈದು ಸಾವಿರ ಮೊಳ ಉದ್ದವಾಗಿಯೂ ಪಶ್ಚಿಮಕ್ಕೆ
ಹತ್ತು ಸಾವಿರ ಮೊಳ ಅಗಲವಾಗಿಯೂ ಪೂರ್ವಕ್ಕೆ ಹತ್ತು
ಸಾವಿರ ಮೊಳ ಅಗಲವಾಗಿಯೂ ದಕ್ಷಿಣಕ್ಕೆ ಇಪ್ಪತ್ತೈದು
ಸಾವಿರ ಮೊಳ ಅಗಲವಾಗಿಯೂ ಇರುತ್ತದೆ. ಯೆಹೋ
ವನ ಆಲಯವು ಈ ಪ್ರದೇಶದ ಮಧ್ಯದಲ್ಲಿರುವುದು. 11ಈ
ಭೂಮಿಯು ಚಾದೋಕನ ಸಂತತಿಯವರಿಗಿರುವದು. ಆ
ಜನರು ನನ್ನ ಪರಿಶುದ್ಧ ಯಾಜಕರಾಗಿ ಆರಿಸಲ್ಪ
ಟ್ಟಿರುತ್ತಾರೆ. ಯಾಕೆಂದರೆ ಇಸ್ರೇಲಿನ ಇತರ ಜನರು
ನನ್ನನ್ನು ಬಿಟ್ಟು ತೊಲಗಿದರೂ ಇವರು ನನಗೆ ಸೇವೆ
ಮಾಡುವದನ್ನು ಮುಂದುವರಿಸುತ್ತಿದ್ದರು. ಲೇವಿ ವಂಶದ
ಜನರಂತೆ ಚಾದೋಕನ ಸಂತತಿಯವರು ನನ್ನನ್ನು ಬಿಟ್ಟು
ಹೋಗಲಿಲ್ಲ. 12ಪವಿತ್ರ ಪ್ರಾಂತ್ಯದ ಈ ಭಾಗವು ಆ
ಯಾಜಕರಿಗಾಗಿ ಮೀಸಲಾಗಿದೆ. ಇದು ಲೇವಿಯರ
ಭೂಮಿಗೆ ತಾಗಿ ಇರುತ್ತದೆ.

13''ಯಾಜಕರ ಭೂಮಿಯ ಪಕ್ಕದಲ್ಲಿ ಲೇವಿಯರ
ಪಾಲಿನ ಭೂಮಿ ಇರುವದು. ಇದರ ಇಪ್ಪತ್ತೈದು ಸಾವಿರ
ಮೊಳ; ಅಗಲ ಹತ್ತು ಸಾವಿರ ಮೊಳ. ಈ ಎರಡು ಪಾಲು
ಗಳ ಒಟ್ಟಳತೆ ಇಪ್ಪತ್ತೈದು ಸಾವಿರ ಮೊಳ ಉದ್ದ, ಇಪ್ಪತ್ತು
ಸಾವಿರ ಮೊಳ ಅಗಲ. 14ಈ ಪ್ರದೇಶವನ್ನು ಲೇವಿಯರು
ಮಾರಕೂಡದು ಬದಲಾಯಿಕೂಡದು ಮತ್ತು ವಿಭಜಿಸ
ಕೂಡದು. ಈ ಪ್ರದೇಶವು ಯೆಹೋವನಿಗೆ ಮೀಸಲಾ
ಗಿರುವುದರಿಂದ ಇದು ದೇಶದ ಅತ್ಯುತ್ತಮ ಭಾಗವಾಗಿದೆ.

### ನಗರದ ಆಸ್ತಿಯ ಪಾಲು

15''ಯಾಜಕರಿಗೆ ಮತ್ತು ಲೇವಿಯರಿಗೆ ಸ್ಥಳ ಕೊಟ್ಟ
ಮೇಲೆ ಇನ್ನೂ ಇಪ್ಪತ್ತೈದು ಸಾವಿರ ಮೊಳ ಉದ್ದ ಮತ್ತು
ಐದು ಸಾವಿರ ಮೊಳ ಅಗಲದ ಒಂದು ತುಂಡು ಜಾಗ
ಉಳಿಯುವದು. ಈ ಜಾಗವು ನಗರವನ್ನು ಕಟ್ಟುವದ
ಕ್ಕಾಗಿ; ಪಶುಗಳ ಹುಲ್ಲುಗಾವಲಿಗಾಗಿ ಮತ್ತು ಮನೆಗಳನ್ನು
ಕಟ್ಟುವುದಕ್ಕಾಗಿ ಇರುವದು. ಸಾಮಾನ್ಯ ಜನರು ಈ
ಜಾಗವನ್ನು ಉಪಯೋಗಿಸಬಹುದು. ನಗರವು ಇದರ
ಮಧ್ಯದಲ್ಲಿ ಇರುವದು. 16ನಗರದ ಅಳತೆಯು ಈ ರೀತಿ
ಯಾಗಿ ಇರುವದು: ಉತ್ತರದ ಮೇರೆಯು ನಾಲ್ಕು
ಸಾವಿರದ ಐನೂರು ಮೊಳ, ದಕ್ಷಿಣದ ಮೇರೆಯು ನಾಲ್ಕು
ಸಾವಿರದ ಐನೂರು ಮೊಳ, ಪೂರ್ವದಿಕ್ಕಿನ ಮೇರೆಯು
ನಾಲ್ಕು ಸಾವಿರದ ಐನೂರು ಮೊಳ ಮತ್ತು ಪಶ್ಚಿಮ ದಿಕ್ಕಿನ
ಮೇರೆಯು ನಾಲ್ಕು ಸಾವಿರದ ಐನೂರು ಮೊಳ ಇರು
ವದು. 17ಪಶುಗಳನ್ನು ಮೇಯಿಸಲು ಪಟ್ಟಣದ ಸುತ್ತಲೂ
ಹುಲ್ಲುಗಾವಲಿರುವದು. ಈ ಹುಲ್ಲುಗಾವಲಿನ ಅಗಲವು
ಪಟ್ಟಣದ ಸುತ್ತಲೂ ಇನ್ನೂರ ಐವತ್ತು ಮೊಳವಿರುತ್ತದೆ.
18ವಿಶೇಷವಾದ ಪ್ರದೇಶದಲ್ಲಿ ಉಳಿದ ಸ್ಥಳದ ಪೂರ್ವಕ್ಕೆ
ಹತ್ತು ಸಾವಿರ ಮೊಳ ಮತ್ತು ಪಶ್ಚಿಮಕ್ಕೆ ಹತ್ತು ಸಾವಿರ
ಮೊಳ. ಈ ಸ್ಥಳವು ಭೂಪ್ರದೇಶದ ಪವಿತ್ರಭಾಗದ
ಪಕ್ಕದಲ್ಲಿರುತ್ತದೆ. ನಗರದ ಕೆಲಸಗಾರರಿಗೆ ಬೆಳೆಗಳನ್ನು
ಬೆಳೆಯಿಸುವುದಕ್ಕಾಗಿ ಈ ಸ್ಥಳವಿರುತ್ತದೆ. 19ನಗರದ
ಕೆಲಸಗಾರರು ಈ ಜಾಗವನ್ನು ಉತ್ತು ಬೆಳೆ ಬೆಳೆಸುವರು.
ಇವರು ಇಸ್ರೇಲರ ಎಲ್ಲಾ ಗೋತ್ರಕ್ಕೆ ಸೇರಿದವರು
ಆಗಿರುತ್ತಾರೆ.

20''ವಿಶೇಷವಾದ ಈ ಭೂಪ್ರದೇಶವು ಚೌಕವಾಗಿರು
ವದು. ಇದರ ಉದ್ದ ಇಪ್ಪತ್ತೈದು ಸಾವಿರ ಮೊಳ ಮತ್ತು
ಅಗಲ ಇಪ್ಪತ್ತೈದು ಸಾವಿರ ಮೊಳ. ಈ ಪ್ರದೇಶವನ್ನು ನೀನು

ಅದರ ವಿಶೇಷವಾದ ಕಾರ್ಯಗಳಿಗಾಗಿ ಮೀಸಲಾಗಿಡಬೇಕು. ಅದರ ಒಂದು ಭಾಗವು ಯಾಜಕರಿಗಾಗಿರುತ್ತದೆ. ಇನ್ನೊಂದು ಭಾಗವು ಲೇವಿಯರಿಗಾಗಿರುತ್ತದೆ; ಮತ್ತೊಂದು ಭಾಗವು ಪಟ್ಟಣಕ್ಕಾಗಿರುತ್ತದೆ.

21-22‘‘ಈ ವಿಶೇಷ ಭೂಪ್ರದೇಶದ ಒಂದು ಭಾಗವು
ದೇಶಾಧಿಪತಿಗೆ ಸೇರಿದೆ. ಈ ಭೂಪ್ರದೇಶವು ಚಚ್ಚೌಕಾರವಾಗಿದೆ. ಇದರ ಉದ್ದ 25,000 ಮೊಳ. ಇದರ ಅಗಲ 25,000 ಮೊಳ. ಈ ವಿಶೇಷದ ಪ್ರದೇಶದಲ್ಲಿ ಒಂದು ಭಾಗವೂ ಯಾಜಕರಿಗೂ ಒಂದು ಭಾಗವೂ ಲೇವಿಯರಿಗೂ ಒಂದು ಭಾಗವು ದೇವಾಲಯಕ್ಕೂ ಸೇರಿವೆ. ಈ ವಿಶೇಷ ಪ್ರದೇಶದ ಕೇಂದ್ರದಲ್ಲಿ ದೇವಾಲಯವಿರುತ್ತದೆ. ಉಳಿದ ಭಾಗವೆಲ್ಲಾ ದೇಶಾಧಿಪತಿಗೆ ಸೇರಿದೆ. ಬೆನ್ಯಾಮೀನನ ಭಾಗಕ್ಕೂ ಯೆಹೂದದ ಭಾಗಕ್ಕೂ ನಡುವೆ ಇರುವ ಭೂಮಿಯು ಅಧಿಪತಿಗೆ ಸೇರಿದೆ.

23-27‘‘ಈ ವಿಶೇಷ ಜಾಗದ ದಕ್ಷಿಣದ ಸ್ಥಳವು
ಜೋರ್ಡನ್ ಹೊಳೆಯ ಪೂರ್ವದಲ್ಲಿ ವಾಸಿಸಿದ್ದ ಇಸ್ರೇಲರ ಕುಲದವರಿಗಾಗಿ. ಈ ಗೋತ್ರದ ಪ್ರತಿ ಒಂದೊಂದು ಕುಲದವರಿಗೆ ಪೂರ್ವದ ಮೇರೆಯಿಂದ ಹಿಡಿದು ಭೂಮಧ್ಯ ಸಮುದ್ರದವರೆಗಿನ ದೇಶದ ಭಾಗದಲ್ಲಿ ಒಂದು ತುಂಡು ಅವರಿಗೆ ದೊರೆಯುವದು. ಉತ್ತರದಿಂದ ದಕ್ಷಿಣದ ತನಕ ಇಲ್ಲಿ ಜಾಗ ದೊರೆಯುವ ಕುಲದವರು ಯಾರೆಂದರೆ, ಬೆನ್ಯಾಮೀನ್, ಸಿಮೆಯೋನ್, ಇಸ್ಸಾಕಾರ್, ಜೆಬೂಲೂನ್ ಮತ್ತು ಗಾದ್ ವಂಶದವರು.

28‘‘ದೇವರ ಪ್ರಾಂತ್ಯದ ದಕ್ಷಿಣದ ಮೇರೆಯು ತಾಮಾರಿ
ನಿಂದ ಪ್ರಾರಂಭವಾಗಿ ಮೆರೀಬತ್‌ಕಾದೇಶ್ ಎಂಬ ಮರುಭೂಮಿಯ ನೀರಿನಾಶ್ರಯಕ್ಕೆ ಹೋಗುತ್ತದೆ. ಅನಂತರ ಈಜಿಪ್ಟಿನ ನದಿಯ ಅಂಚಿನಲ್ಲಿ ಮುಂದುವರಿದು ಭೂಮಧ್ಯ ಸಮುದ್ರಕ್ಕೆ ತಾನು ಸೇರುವ ಸ್ಥಳಕ್ಕೆ ಹೋಗುತ್ತದೆ.
29ಈ ಪ್ರಾಂತ್ಯವನ್ನು ನೀವು ಇಸ್ರೇಲರ ಕುಲದವರಿಗೆ ವಿಭಾಗಿಸಿ ಹಂಚಬೇಕು. ಇದು ಪ್ರತೀ ಕುಲದವರಿಗೆ ದೊರಕುವ ಭೂಮಿಯ ವಿವರ. ’’ಇದು ನನ್ನ ಒಡೆಯನಾದ ಯೆಹೋವನ ನುಡಿ.

### ನಗರದ ಬಾಗಿಲುಗಳು

30‘‘ಇವು ನಗರದ ಬಾಗಿಲುಗಳು. ಅವುಗಳಿಗೆ ಇಸ್ರೇಲರ
ಕುಲದವರ ಹೆಸರು ಕೊಡಲ್ಪಟ್ಟಿದೆ.

‘‘ನಗರದ ಉತ್ತರದ ಮೇರೆಯು ನಾಲ್ಕು ಸಾವಿರದ ಐನೂರು ಮೊಳ ಉದ್ದವಾಗಿರುವದು.
31ಅದಕ್ಕೆ ಮೂರು ಬಾಗಿಲುಗಳು ಇರುವವು. ರೂಬೇನ್ ಬಾಗಿಲು, ಯೆಹೂದ ಬಾಗಿಲು ಮತ್ತು ಲೇವಿ ಬಾಗಿಲು.
32ನಗರದ ಪೂರ್ವದ ಮೇರೆಯು ನಾಲ್ಕು ಸಾವಿರದ ಐನೂರು ಮೊಳ ಉದ್ದವಾಗಿರುವದು. ಈ ಮೇರೆಯಲ್ಲಿ ಮೂರು ಬಾಗಿಲುಗಳಿರುವವು. ಯೋಸೇಫ್ ಬಾಗಿಲು, ಬೆನ್ಯಾಮೀನ್ ಬಾಗಿಲು ಮತ್ತು ದಾನ್ ಬಾಗಿಲು.

33‘‘ನಗರದ ದಕ್ಷಿಣ ಮೇರೆಯು ನಾಲ್ಕು ಸಾವಿರದ
ಐನೂರು ಮೊಳ ಉದ್ದವಿರುವದು. ಇದಕ್ಕೆ ಮೂರು ಬಾಗಿಲುಗಳಿರುವವು. ಸಿಮೆಯೋನ್ ಬಾಗಿಲು, ಇಸ್ಸಾಕಾರ್ ಬಾಗಿಲು ಮತ್ತು ಜೆಬುಲೋನ್ ಬಾಗಿಲು.

34‘‘ನಗರದ ಪಶ್ಚಿಮದ ಮೇರೆಯು ನಾಲ್ಕು ಸಾವಿರದ
ಐನೂರು ಮೊಳ ಉದ್ದವಿರುವದು. ಅದಕ್ಕೆ ಮೂರು ಬಾಗಿಲುಗಳು ಇರುವವು. ಗಾದ್ ಬಾಗಿಲು, ಆಶೇರ್ ಬಾಗಿಲು ಮತ್ತು ನಫ್ತಾಲಿ ಬಾಗಿಲು.

35‘‘ನಗರದ ಸುತ್ತಳತೆಯು ಹದಿನೆಂಟು ಸಾವಿರ ಮೊಳ.
ಇಂದಿನಿಂದ ಈ ನಗರದ ಹೆಸರು ‘ಯೆಹೋವನು ಅಲ್ಲಿದ್ದಾನೆ.’’ *

---

**ಯೆಹೋವನು ಅಲ್ಲಿದ್ದಾನೆ:** ಇದು ‘‘ಜೆರುಸಲೇಮ್’’ ಪದದ ಶಬ್ದ ಶ್ಲೇಷ. ಹೀಬ್ರೂವಿನಲ್ಲಿ ಈ ಪದವು ‘‘ಯೆಹೊಶಾಮಾ’’ ಎಂದು ಉಚ್ಚರಿಸಲ್ಪಟ್ಟಂತೆ ಕೇಳಿಸುತ್ತದೆ.

# ದಾನಿಯೇಲ

1 ನೆಬೂಕದ್ನೆಚ್ಚರನು ಬಾಬಿಲೋನಿನ ಅರಸನಾಗಿ
ದ್ದನು. ನೆಬೂಕದ್ನೆಚ್ಚರನು ಜೆರುಸಲೇಮಿಗೆ
ಬಂದನು. ನೆಬೂಕದ್ನೆಚ್ಚರನು ತನ್ನ ಸೈನ್ಯ ಸಮೇತ ಜೆರುಸ
ಲೇಮಿಗೆ ಮುತ್ತಿಗೆ ಹಾಕಿದನು. ಯೆಹೂದದ ಅರಸನಾದ
ಯೆಹೋಯಾಕೀಮನ ಆಳ್ವಿಕೆಯ ಮೂರನೆಯ ವರ್ಷ
ದಲ್ಲಿ* ಈ ಘಟನೆ ನಡೆಯಿತು. 2ನೆಬೂಕದ್ನೆಚ್ಚರನು
ಯೆಹೂದದ ಅರಸನಾದ ಯೆಹೋಯಾಕೀಮನನ್ನು
ಸೋಲಿಸುವಂತೆ ಯೆಹೋವನು ಮಾಡಿದನು. ಅವನು
ಆಲಯದ ಸಾಮಾಗ್ರಿಗಳನ್ನು ಬಾಬಿಲೋನಿಗೆ ತೆಗೆದು
ಕೊಂಡು ಹೋದನು. ಆ ಸಾಮಾಗ್ರಿಗಳನ್ನು ಅವನು ತನ್ನ
ವಿಗ್ರಹಾಲಯದಲ್ಲಿಟ್ಟನು.

3ಆಗ ಅರಸನಾದ ನೆಬೂಕದ್ನೆಚ್ಚರನು ಅಶ್ಪೆನಜನಿಗೆ
ಆದೇಶಕೊಟ್ಟನು. ಅಶ್ಪೆನಜನು ಅರಸನ ಸೇವೆಯಲ್ಲಿದ್ದ
ಎಲ್ಲಾ ಕಂಚುಕಿಯರಿಗೆ ಮುಖಂಡನಾಗಿದ್ದನು. ಅರಸನು
ಕೆಲವು ಜನ ಇಸ್ರೇಲರನ್ನು ತನ್ನ ಅರಮನೆಗೆ ಸೇರಿಸ
ಬೇಕೆಂದು ಅಶ್ಪೆನಜನಿಗೆ ಹೇಳಿದನು. ನೆಬೂಕದ್ನೆಚ್ಚರನು
ಇಸ್ರೇಲರ ರಾಜವಂಶೀಯರನ್ನು ಮತ್ತು ಪ್ರಮುಖ ಮನೆ
ತನದವರನ್ನು ತನ್ನ ಅರಮನೆಗೆ ಸೇರಿಸಬಯಸಿದನು.
4ಅರಸನಾದ ನೆಬೂಕದ್ನೆಚ್ಚರನು ಆರೋಗ್ಯವಂತರೂ
ಅಂಗದೋಷವಿಲ್ಲದವರೂ ಸುಂದರರೂ ಬುದ್ಧಿ
ವಂತರೂ ವಿದ್ಯಾನಿಪುಣರೂ ಆಗಿದ್ದ ಯುವಕರನ್ನು ತನ್ನ
ಸನ್ನಿಧಿಸೇವೆಗಾಗಿ ಆರಿಸಿಕೊಂಡು ಅವರಿಗೆ ಕಸ್ದೀಯ
ಭಾಷೆಯನ್ನೂ ಬರವಣಿಗೆಯನ್ನೂ ಕಲಿಸಬೇಕೆಂದು ಆಜ್ಞೆ
ವಿಧಿಸಿದನು.

5ಅರಸನಾದ ನೆಬೂಕದ್ನೆಚ್ಚರನು ದಿನಾಲು ಆ ತರುಣ
ರಿಗೆ ತಾನು ಸೇವಿಸುವ ಆಹಾರವನ್ನು ಮತ್ತು ದ್ರಾಕ್ಷಾರಸ
ವನ್ನು ಕೊಡುತ್ತಿದ್ದನು. ಅವರನ್ನು ತನ್ನ ಸೇವಕರನ್ನಾಗಿ
ಮಾಡಿಕೊಳ್ಳುವ ಉದ್ದೇಶದಿಂದ ಮೂರು ವರ್ಷಗಳ ತರ
ಬೇತಿ ಕೊಡಬೇಕೆಂದು ಆಜ್ಞಾಪಿಸಿದನು.

6ಆ ತರುಣರಲ್ಲಿ ಯೆಹೂದ ಕುಲಕ್ಕೆ ಸೇರಿದವರಾದ
ದಾನಿಯೇಲ, ಹನನ್ಯ, ಮೀಶಾಯೇಲ, ಅಜರ್ಯ
ಎಂಬವರಿದ್ದರು.

7ಅಶ್ಪೆನಜನು ಆ ಯೆಹೂದ್ಯ ತರುಣರಿಗೆ ಬಾಬಿಲೋ
ನಿನ ಹೆಸರುಗಳನ್ನಿಟ್ಟನು. ದಾನಿಯೇಲನ ಹೊಸ ಹೆಸರು
ಬೇಲ್ತೆಶಚ್ಚರ್, ಹನನ್ಯನ ಹೊಸ ಹೆಸರು ಶದ್ರಕ್, ಮೀಶಾ
ಯೇಲನ ಹೊಸ ಹೆಸರು ಮೇಶಕ್ ಮತ್ತು ಅಜರ್ಯನ
ಹೊಸ ಹೆಸರು ಅಬೇದ್‌ನೆಗೋ. 8ದಾನಿಯೇಲನು
ಅರಸನ ಪುಷ್ಟಿದಾಯಕ ಆಹಾರವನ್ನು ಮತ್ತು ಪಾನೀಯ
ವನ್ನು ಇಷ್ಟಪಡಲಿಲ್ಲ. ಆ ಆಹಾರ ಮತ್ತು ಪಾನೀಯಗ
ಳಿಂದ ತನ್ನನ್ನು ಅಶುದ್ಧಗೊಳಿಸಿಕೊಳ್ಳಲು ದಾನಿಯೇಲ
ನಿಗೆ ಇಷ್ಟವಿರಲಿಲ್ಲ. ಆದುದರಿಂದ ಈ ರೀತಿ ತನ್ನನ್ನು
ಅಶುದ್ಧಗೊಳಿಸಿಕೊಳ್ಳದೆ ಇರುವದಕ್ಕಾಗಿ ಅಶ್ಪೆನಜನ
ಅಪ್ಪಣೆಯನ್ನು ಕೇಳಿದನು.

9ದೇವರು ಅಶ್ಪೆನಜನ ಮನಸ್ಸಿನಲ್ಲಿ ದಾನಿಯೇಲನ
ಮೇಲೆ ಕನಿಕರವನ್ನೂ ದಯೆಯನ್ನೂ ಹುಟ್ಟಿಸಿದನು.
10ಆದರೆ ಅಶ್ಪೆನಜನು ದಾನಿಯೇಲನಿಗೆ, ‘‘ನಾನು ನನ್ನ
ಒಡೆಯನಾದ ಅರಸನಿಗೆ ಹೆದರುತ್ತೇನೆ. ಈ ಆಹಾರ
ಮತ್ತು ಪಾನೀಯಗಳನ್ನು ನಿನಗೆ ಕೊಡಬೇಕೆಂದು
ಅರಸನು ಅಪ್ಪಣೆ ಮಾಡಿದ್ದಾನೆ. ನೀನು ಈ ಆಹಾರವನ್ನು
ತೆಗೆದುಕೊಳ್ಳದಿದ್ದರೆ ಅಶಕ್ತನಾಗಿಯೂ ಅಸ್ವಸ್ಥನಾಗಿಯೂ
ಕಾಣಿಸುವೆ. ನೀನು ನಿನ್ನ ವಯಸ್ಸಿನ ಬೇರೆ ತರುಣರಿಗಿಂತ
ಸೊರಗಿದವನಾಗಿ ಕಾಣುವೆ. ಅರಸನು ಇದನ್ನು ಗಮನಿಸಿ
ನನ್ನ ಮೇಲೆ ಕೋಪಗೊಂಡು ನನ್ನ ತಲೆಯನ್ನೇ ಕತ್ತರಿಸ
ಬಹುದು. ಅದಕ್ಕೆ ನೀನೇ ಹೊಣೆಯಾಗುವೆ’’ ಎಂದನು.

11ಆಗ ದಾನಿಯೇಲನು ತಮ್ಮ ಕಾವಲುಗಾರನೊಂದಿಗೆ
ಮಾತನಾಡಿದನು. ಅಶ್ಪೆನಜನು ಕಾವಲುಗಾರನಿಗೆ ದಾನಿ
ಯೇಲ, ಹನನ್ಯ, ಮೀಶಾಯೇಲ, ಅಜರ್ಯ ಇವರುಗಳ
ಮೇಲೆ ದೃಷ್ಟಿಯಿಟ್ಟಿರಬೇಕೆಂದು ಆಜ್ಞಾಪಿಸಿದನು.
12ದಾನಿಯೇಲನು ಕಾವಲುಗಾರನಿಗೆ, ‘‘ದಯವಿಟ್ಟು
ಹತ್ತು ದಿನಗಳವರೆಗೆ ನಮ್ಮನ್ನು ಪರೀಕ್ಷಿಸಿರಿ. ತಿನ್ನುವದಕ್ಕೆ
ಕಾಯಿಪಲ್ಯ, ಕುಡಿಯುವದಕ್ಕೆ ನೀರು, ಇವುಗಳ ಹೊರತು
ನಮಗೆ ಇನ್ನೇನೂ ಕೊಡಬೇಡಿ. 13ಹತ್ತು ದಿನಗಳಾದ
ಮೇಲೆ ನಮ್ಮನ್ನು ಅರಸನ ಆಹಾರ ಪಾನೀಯಗಳನ್ನು
ಸ್ವೀಕರಿಸುವ ತರುಣರ ಜೊತೆಗೆ ಹೋಲಿಸಿ ನೋಡಿರಿ.
ಯಾರು ಹೆಚ್ಚು ಆರೋಗ್ಯವಂತರಾಗಿ ಕಾಣುತ್ತಾ

---

**ಯೆಹೋಯಾಕೀಮ ... ವರ್ಷ** ಅಂದರೆ ಕ್ರಿ. ಪೂ. 605

ರೆಂಬುದನ್ನು ನೀವೇ ಪರೀಕ್ಷಿಸಿನೋಡಿರಿ. ಆಮೇಲೆ ನಮ್ಮ
ವಿಷಯದಲ್ಲಿ ನೀವೇ ತೀರ್ಮಾನಿಸಿರಿ. ನಾವು ನಿಮ್ಮ ಸೇವಕ
ರಾಗಿದ್ದೇವೆ'' ಎಂದು ಬೇಡಿಕೊಂಡನು.
14ಕಾವಲುಗಾರನು ದಾನಿಯೇಲ,ಹನನ್ಯ, ಮೀಶಾ
ಯೇಲ, ಅಜರ್ಯ ಇವರುಗಳನ್ನು ಹತ್ತು ದಿನಗಳವರೆಗೆ
ಪರೀಕ್ಷಿಸಲು ಒಪ್ಪಿಕೊಂಡನು. 15ಹತ್ತು ದಿನಗಳ ತರು
ವಾಯ ದಾನಿಯೇಲ ಮತ್ತು ಅವನ ಸ್ನೇಹಿತರು ಅರಸನ
ಆಹಾರವನ್ನು ಊಟಮಾಡಿದ ಇತರ ಎಲ್ಲ ತರುಣರಿಗಿಂತ
ಆರೋಗ್ಯವಂತರಾಗಿ ಕಾಣಿಸಿದರು. 16ಆದುದರಿಂದ
ಕಾವಲುಗಾರನು ಅರಸನ ವಿಶೇಷ ಆಹಾರವನ್ನು ಮತ್ತು
ದ್ರಾಕ್ಷಾರಸವನ್ನು ತೆಗೆದುಕೊಂಡು ಅದಕ್ಕೆ ಬದಲಾಗಿ
ದಾನಿಯೇಲ,ಹನನ್ಯ, ಮೀಶಾಯೇಲ, ಅಜರ್ಯ
ಇವರುಗಳಿಗೆ ಕಾಯಿಪಲ್ಯಗಳನ್ನು ಕೊಡಲು
ಪ್ರಾರಂಭಿಸಿದನು.
17ದೇವರು ದಾನಿಯೇಲ, ಹನನ್ಯ, ಮೀಶಾಯೇಲ,
ಅಜರ್ಯ ಇವರುಗಳಿಗೆ ಅನೇಕ ಶಾಸ್ತ್ರಗಳನ್ನೂ ವಿಜ್ಞಾನ
ವನ್ನೂ ಕಲಿಯುವ ಬುದ್ಧಿ ಸಾಮರ್ಥ್ಯಗಳನ್ನು ದಯ
ಪಾಲಿಸಿದನು. ದಾನಿಯೇಲನು ಸಮಸ್ತ ಸ್ವಪ್ನಗಳನ್ನೂ ದಿವ್ಯ
ದರ್ಶನಗಳನ್ನೂ ಗ್ರಹಿಸಬಲ್ಲವನಾಗಿದ್ದನು.
18ಎಲ್ಲ ತರುಣರು ಮೂರು ವರ್ಷ ತರಬೇತಿ ಪಡೆಯ
ಬೇಕೆಂದು ಅರಸನು ಹೇಳಿದ್ದನು. ಆ ಅವಧಿ ಮುಗಿದ
ಮೇಲೆ ಅಶ್ಪೆನಜನು ಆ ಎಲ್ಲ ತರುಣರನ್ನು ಅರಸನಾದ
ನೆಬೂಕದ್ನೆಚ್ಚರನ ಸಮ್ಮುಖಕ್ಕೆ ಕರೆತಂದನು. 19ರಾಜನು
ಅವರ ಸಂಗಡ ಮಾತಾಡಿದನು. ಅರಸನಿಗೆ ದಾನಿಯೇಲ,
ಹನನ್ಯ, ಮೀಶಾಯೇಲ, ಅಜರ್ಯ, ಇವರಷ್ಟು ಯೋಗ್ಯ
ರಾದವರು ಆ ಸಮಸ್ತ ಯುವಕರಲ್ಲಿ ಮತ್ತಾರೂ ಕಂಡು
ಬರಲಿಲ್ಲ. ಆದುದರಿಂದ ಆ ನಾಲ್ಕು ಜನ ಯುವಕರು
ರಾಜನ ಸೇವಕರಾದರು. 20ಅರಸನು ಮಹತ್ವಪೂರ್ಣ
ವಾದ ವಿಷಯಗಳ ಬಗ್ಗೆ ಅವರನ್ನು ಕೇಳಿದಾಗಲೆಲ್ಲ ಅವರು
ಹೆಚ್ಚಿನ ಪ್ರಜ್ಞೆಯನ್ನು, ಬುದ್ಧಿಯನ್ನು ತೋರಿದರು.
ಅವರು ಇಡೀ ದೇಶದ ಎಲ್ಲ ಜೋಯಿಸರಿಗಿಂತಲೂ
ಮಂತ್ರವಾದಿಗಳಿಗಿಂತಲೂ ಹತ್ತರಷ್ಟು ನಿಪುಣರಾಗಿದ್ದಾ
ರೆಂಬುದನ್ನು ಅರಸನು ಕಂಡು ಕೊಂಡನು. 21ದಾನಿಯೇ
ಲನು ರಾಜನಾದ ಕೋರೆಷನ ಆಳ್ವಿಕೆಯ ಮೊದಲನೆ ವರು
ಷದ* ತನಕ ಅರಸನ ಸೇವಕನಾಗಿ ಮುಂದುವರಿದನು.

## ನೆಬೂಕದ್ನೆಚ್ಚರನ ಸ್ವಪ್ನ

2 ತನ್ನ ಆಳ್ವಿಕೆಯ ಎರಡನೇ ವರ್ಷದಲ್ಲಿ ನೆಬೂಕದ್ನೆಚ್ಚ
ರನು ಕೆಲವು ಕನಸುಗಳನ್ನು ಕಂಡನು. ಆ ಕನಸುಗಳು
ಅವನನ್ನು ತತ್ತರಿಸಿಬಿಟ್ಟವು ಮತ್ತು ಅವನಿಗೆ ನಿದ್ರೆ ಬರದಂತೆ
ಮಾಡಿದವು. 2ಅರಸನು ತನ್ನ ಎಲ್ಲಾ ಪಂಡಿತರನ್ನು
ಕರೆಸಿದನು. ಅವರು ಮಾಟಮಂತ್ರಗಳಿಂದ, ಜ್ಯೋತಿ
ಶ್ಯಾಸ್ತ್ರದ ಸಹಾಯದಿಂದ ಅರಸನ ಕನಸಿನ ಅರ್ಥವನ್ನೂ
ಭವಿಷ್ಯದಲ್ಲಿ ಸಂಭವಿಸಲಿರುವುದನ್ನೂ ತಿಳಿದುಕೊಳ್ಳಲು
ಪ್ರಯತ್ನ ಮಾಡಿದರು. ರಾಜನು ತಾನು ಕಂಡ ಕನಸಿನ
ಅರ್ಥವನ್ನು ತಿಳಿಯಬಯಸಿದ್ದರಿಂದ ಅವರು ಒಳಗೆ
ಬಂದು ಅರಸನ ಸಮ್ಮುಖದಲ್ಲಿ ನಿಂತುಕೊಂಡರು.
3ಆಗ ಅರಸನು ಅವರಿಗೆ, ''ನಾನೊಂದು ಕನಸು ಕಂಡೆ.
ಅದು ನನ್ನನ್ನು ಪೀಡಿಸುತ್ತಿದೆ. ಆ ಕನಸಿನ ಅರ್ಥವೇನೆಂಬು
ದನ್ನು ನಾನು ತಿಳಿಯಬಯಸುತ್ತೇನೆ'' ಎಂದನು.
4ಆಗ ಆ ಕಸ್ದೀಯರು ಅರಮೇಯಿಕ್ ಭಾಷೆಯಲ್ಲಿ,
''ಅರಸನೇ ಚಿರಂಜೀವಿಯಾಗಿರು. ನಾವು ನಿನ್ನ ಸೇವಕರು.
ದಯವಿಟ್ಟು ನಮಗೆ ನಿನ್ನ ಕನಸನ್ನು ಹೇಳು. ನಾವು ಅದರ
ಅರ್ಥವನ್ನು ತಿಳಿಸುತ್ತೇವೆ'' ಎಂದು ಉತ್ತರ ಕೊಟ್ಟರು.
5ಆಗ ರಾಜನಾದ ನೆಬೂಕದ್ನೆಚ್ಚರನು, ''ಹಾಗಲ್ಲ,
ನೀವು ನನಗೆ ನನ್ನ ಕನಸನ್ನೂ ಅದರ ಅರ್ಥವನ್ನೂ ತಿಳಿಸ
ಬೇಕು. ಇಲ್ಲವಾದರೆ ನಾನು ನಿಮ್ಮ ದೇಹವನ್ನು ತುಂಡು
ತುಂಡಾಗಿ ಕತ್ತರಿಸಲು ಆಜ್ಞಾಪಿಸುತ್ತೇನೆ. ನಿಮ್ಮ ಮನೆ
ಗಳನ್ನು ಬೀಳಿಸಿ ಮಣ್ಣುಗುಡ್ಡೆಯನ್ನಾಗಿಯೂ ಮತ್ತು
ಬೂದಿರಾಶಿಯನ್ನಾಗಿಯೂ ಮಾಡುವಂತೆ ಆಜ್ಞಾಪಿಸು
ತ್ತೇನೆ. 6ಆದರೆ ನೀವು ನನಗೆ ನನ್ನ ಕನಸನ್ನೂ ಅದರ ಅರ್ಥ
ವನ್ನೂ ಹೇಳಿದರೆ ಕಾಣಿಕೆಗಳನ್ನೂ ಬಹುಮಾನಗಳನ್ನೂ
ಕೊಡುತ್ತೇನೆ ಮತ್ತು ಮಹಾಸನ್ಮಾನವನ್ನು ಮಾಡುತ್ತೇನೆ.
ಆದುದರಿಂದ ನೀವು ನನಗೆ ಕನಸನ್ನೂ ಅದರ ಅರ್ಥ
ವನ್ನೂ ಹೇಳಿರಿ'' ಎಂದನು. 7ಆ ಪಂಡಿತರು ಅರಸನಿಗೆ,
''ದಯವಿಟ್ಟು ತಾವು ಕನಸಿನ ಬಗ್ಗೆ ಹೇಳಿರಿ. ನಾವು ಅದರ
ಅಭಿಪ್ರಾಯವನ್ನು ಹೇಳುತ್ತೇವೆ'' ಎಂದರು.
8ಅರಸನಾದ ನೆಬೂಕದ್ನೆಚ್ಚರನು, ''ನೀವು ಹೆಚ್ಚಿನ
ಕಾಲಾವಕಾಶವನ್ನು ಪಡೆಯುವ ಪ್ರಯತ್ನ ಮಾಡುತ್ತಿದ್ದೀ
ರೆಂಬುದನ್ನು ನಾನು ಬಲ್ಲೆ. ನಾನು ಹೇಳಿದ್ದು ನಿಮಗೆ
ಸರಿಯಾಗಿ ತಿಳಿದಿದೆ. 9ನೀವು ನನಗೆ ನನ್ನ ಕನಸಿನ ಬಗ್ಗೆ
ಹೇಳದಿದ್ದರೆ ನಿಮಗೆ ಶಿಕ್ಷೆಯಾಗುವದೆಂದು ನೀವು ಬಲ್ಲಿರಿ.
ನೀವೆಲ್ಲ ನನಗೆ ಸುಳ್ಳು ಹೇಳಬೇಕೆಂದು ನಿರ್ಧರಿಸಿ
ಕೊಂಡಿದ್ದೀರಿ. ನೀವು ಹೆಚ್ಚಿನ ಸಮಯವನ್ನು ಪಡೆಯಲಿ
ಚ್ಛಿಸುತ್ತಿದ್ದೀರಿ. ನಿಮಗೆ ಹೇಳಿದ್ದನ್ನು ನಾನು ಮರೆತುಬಿಡ
ಬಹುದೆಂದು ನೀವು ಭಾವಿಸುತ್ತಿರುವಿರಿ. ಈಗ ನನ್ನ
ಕನಸನ್ನು ತಿಳಿಸಿರಿ. ನೀವು ಕನಸನ್ನು ತಿಳಿಸಿದರೆ ಅದರ
ನಿಜವಾದ ಅರ್ಥವನ್ನೂ ಹೇಳಬಲ್ಲಿರಿ'' ಎಂದು ಅವರಿಗೆ
ಉತ್ತರಕೊಟ್ಟನು.
10ಕಸ್ದೀಯರು, ''ಮಹಾಪ್ರಭುಗಳು ಕೇಳುತ್ತಿರುವು
ದನ್ನು ಹೇಳುವವರು ಈ ಜಗತ್ತಿನಲ್ಲಿ ಯಾರೂ ಇಲ್ಲ. ಈ
ಹಿಂದೆ ಯಾವ ಅರಸನೂ ತನ್ನ ಆಸ್ಥಾನ ಪಂಡಿತರಿಗೂ
ಮಂತ್ರವಾದಿಗಳಿಗೂ ಇಂತಹ ಪ್ರಶ್ನೆಯನ್ನು ಕೇಳಲಿಲ್ಲ.

---

**ಕೋರೆಷನ ... ವರುಷ** ಕ್ರಿ. ಪೂ. 539.

ಅತ್ಯಂತ ದೊಡ್ಡ ಮತ್ತು ಪ್ರಬಲನಾದ ಅರಸನೂ ತನ್ನ ಪಂಡಿತರಿಗಾಗಲೀ ಜೋಯಿಸರಿಗಾಗಲೀ ಇಂಥದ್ದನ್ನು ಕೇಳಲಿಲ್ಲ. [11]ಮಹಾಪ್ರಭುಗಳು ಕೇಳುವ ವಿಷಯ ಅತಿ ಕಠಿಣವಾದದ್ದು. ದೇವತೆಗಳು ಮಾತ್ರ ಅರಸನ ಕನಸನ್ನೂ ಅದರ ಅರ್ಥವನ್ನೂ ತಿಳಿಸಲು ಸಾಧ್ಯ. ಆದರೆ ದೇವತೆಗಳು ಮಾನವರೊಂದಿಗೆ ವಾಸಮಾಡುವದಿಲ್ಲ ''ಎಂದರು.

[12]ಇದನ್ನು ಕೇಳಿ ಅರಸನು ಬಹಳ ಕೋಪಗೊಂಡು ಬಾಬಿಲೋನಿನ ಎಲ್ಲಾ ವಿದ್ವಾಂಸರನ್ನು ಕೊಲ್ಲಬೇಕೆಂದು ಆಜ್ಞಾಪಿಸಿದನು. [13]ಅರಸನಾದ ನೆಬೂಕದ್ನೆಚ್ಚರನ ಆಜ್ಞೆಯನ್ನು ಪ್ರಕಟಗೊಳಿಸಲಾಯಿತು. ಎಲ್ಲಾ ವಿದ್ವಾಂಸರನ್ನು ಕೊಲ್ಲಬೇಕಾಗಿತ್ತು. ದಾನಿಯೇಲ ಮತ್ತು ಅವನ ಸ್ನೇಹಿತರನ್ನು ಹುಡುಕಿ ಅವರ ಕೊಲೆ ಮಾಡುವದಕ್ಕಾಗಿ ರಾಜಭಟರನ್ನು ಕಳುಹಿಸಲಾಯಿತು.

[14]ಅರ್ಯೋಕನು ಅರಸನ ಮೈಗಾವಲಿನವರ ದಳವಾಯಿಯಾಗಿದ್ದನು. ಅವನು ಬಾಬಿಲೋನಿನ ವಿದ್ವಾಂಸರನ್ನು ಕೊಲ್ಲಲು ಹೊರಟಿದ್ದನು. ಆದರೆ ದಾನಿಯೇಲನು ಅವನೊಂದಿಗೆ ಮಾತನಾಡಿದನು. ದಾನಿಯೇಲನು ಅವನ ಸಂಗಡ ವಿವೇಕ ಮತ್ತು ನಮ್ರತೆಯಿಂದ ಮಾತನಾಡಿದನು. [15]ದಾನಿಯೇಲನು ಅರ್ಯೋಕನಿಗೆ,''ಅರಸನು ಅಂತಹ ಕಠಿಣ ಶಿಕ್ಷೆಯನ್ನು ಏಕೆ ಆಜ್ಞಾಪಿಸಿದನು? ''ಎಂದು ಕೇಳಿದನು.

ಆಗ ಅರ್ಯೋಕನು ಅರಸನ ಕನಸಿಗೆ ಸಂಬಂಧಿಸಿದ ಎಲ್ಲಾ ವಿಷಯವನ್ನು ವಿವರಿಸಿದನು. [16]ಆಗ ದಾನಿಯೇಲನು ಅರಸನಾದ ನೆಬೂಕದ್ನೆಚ್ಚರನ ಬಳಿಗೆ ಹೋಗಿ ತನಗೆ ಸ್ವಲ್ಪ ಸಮಯ ಕೊಡುವುದಾದರೆ ತಾನು ಅರಸನ ಕನಸನ್ನೂ ಅದರ ಅರ್ಥವನ್ನೂ ತಿಳಿಸುವುದಾಗಿ ಹೇಳಿದನು.

[17]ದಾನಿಯೇಲನು ಮನೆಗೆ ಹೋಗಿ ತನ್ನ ಸ್ನೇಹಿತರಾದ ಹನನ್ಯ, ಮೀಶಾಯೇಲ, ಅಜರ್ಯ ಇವರುಗಳಿಗೆ ಈ ವಿಷಯ ತಿಳಿಸಿದನು. [18]ಪರಲೋಕದ ದೇವರು ತನಗೆ ಸಹಾಯ ಮಾಡುವಂತೆಯೂ ಕೃಪೆ ತೋರುವಂತೆಯೂ ಪ್ರಾರ್ಥಿಸಬೇಕೆಂದು ದಾನಿಯೇಲನು ಅವರನ್ನು ಕೇಳಿಕೊಂಡನು. ದಾನಿಯೇಲ ಮತ್ತು ಅವನ ಸ್ನೇಹಿತರು ಮರಣದಂಡನೆಯಿಂದ ಪಾರಾಗಬೇಕಿದ್ದರೆ ಕನಸನ್ನೂ ಅದರ ಅರ್ಥವನ್ನೂ ತಿಳಿಸಬೇಕಿತ್ತು.

[19]ಅಂದು ರಾತ್ರಿ ದಾನಿಯೇಲನಿಗೆ ದೇವದರ್ಶನವಾಯಿತು. ಆಗ ದಾನಿಯೇಲನು ಪರಲೋಕದ ದೇವರನ್ನು ಹೀಗೆ ಸ್ತುತಿಸಿದನು:

20 ''ದೇವರ ನಾಮವನ್ನು ಎಂದೆಂದಿಗೂ ಸ್ತುತಿಸಿರಿ!
ಜ್ಞಾನವೂ ಸಾಮರ್ಥ್ಯವೂ ಆತನವೇ.
21 ಆತನು ಕಾಲ ಸಮಯಗಳನ್ನು ಮಾರ್ಪಡಿಸುತ್ತಾನೆ.
ಆತನು ಅರಸರನ್ನು ಬದಲಾಯಿಸುತ್ತಾನೆ. ಆತನು ಅರಸರಿಗೆ ಪ್ರಭುತ್ವವನ್ನು ಕೊಡುವನು. ಆತನು ಅವರ ಪ್ರಭುತ್ವವನ್ನು ಕಿತ್ತುಕೊಳ್ಳುವನು! ಜನರಿಗೆ ಜ್ಞಾನವನ್ನು ಕೊಟ್ಟು ಜ್ಞಾನಿಗಳನ್ನಾಗಿ ಮಾಡುವವನು ಆತನೇ. ಜನರಿಗೆ ವಿವೇಕವನ್ನು ಕೊಟ್ಟು ವಿವೇಕಿಗಳನ್ನಾಗಿ ಮಾಡುವವನು ಆತನೇ.
22 ಆಳದಲ್ಲಿ ಅಡಗಿರುವ ರಹಸ್ಯಗಳನ್ನು ಬಲ್ಲವನು ಆತನೇ. ಬೆಳಕು ಆತನಲ್ಲಿಯೇ ಇದೆ. ಆದುದರಿಂದ ಕಗ್ಗತ್ತಲೆಯಲ್ಲಿ ಅಡಗಿರುವುದು ಆತನಿಗೆ ಗೋಚರವಾಗುವುದು.
23 ನನ್ನ ಪೂರ್ವಿಕರ ದೇವರೇ, ನಿನ್ನನ್ನು ಕೊಂಡಾಡಿ ಸ್ತುತಿಸುತ್ತೇನೆ. ನೀನು ನನಗೆ ಜ್ಞಾನವನ್ನೂ ಸಾಮರ್ಥ್ಯವನ್ನೂ ದಯಪಾಲಿಸಿದೆ. ನಾವು ಕೇಳಿದ್ದನ್ನು ಅನುಗ್ರಹಿಸಿದೆ. ಅರಸನ ಕನಸಿನ ಬಗ್ಗೆ ತಿಳಿಸಿದೆ.''

### ದಾನಿಯೇಲನು ಕನಸಿನ ಅರ್ಥವನ್ನು ಹೇಳಿದನು

[24]ಆಮೇಲೆ ದಾನಿಯೇಲನು ಅರ್ಯೋಕನ ಬಳಿಗೆ ಹೋದನು. ಅರಸನಾದ ನೆಬೂಕದ್ನೆಚ್ಚರನು ಬಾಬಿಲೋನಿನ ವಿದ್ವಾಂಸರನ್ನು ಕೊಲ್ಲುವದಕ್ಕೆ ಅರ್ಯೋಕನನ್ನು ಆರಿಸಿದ್ದನು. ದಾನಿಯೇಲನು ಅರ್ಯೋಕನಿಗೆ, ''ಬಾಬಿಲೋನಿನ ವಿದ್ವಾಂಸರನ್ನು ಕೊಲ್ಲಬೇಡ. ನನ್ನನ್ನು ರಾಜನ ಹತ್ತಿರ ಕರೆದುಕೊಂಡು ಹೋಗು. ನಾನು ಅವನಿಗೆ ಅವನ ಕನಸನ್ನು ಮತ್ತು ಅದರ ಅರ್ಥವನ್ನು ತಿಳಿಸುತ್ತೇನೆ '' ಎಂದನು.

[25]ಕೂಡಲೇ ಅರ್ಯೋಕನು ದಾನಿಯೇಲನನ್ನು ರಾಜನ ಹತ್ತಿರ ಕರೆದುಕೊಂಡು ಹೋದನು. ಅರ್ಯೋಕನು ಅರಸನಿಗೆ, ''ಯೆಹೂದದಿಂದ ಸೆರೆಯಾಳಾಗಿ ತಂದವರಲ್ಲಿ ರಾಜನ ಕನಸನ್ನು ಮತ್ತು ಅದರ ಅರ್ಥವನ್ನು ಹೇಳಬಲ್ಲ ಒಬ್ಬನನ್ನು ನಾನು ಕಂಡುಹಿಡಿದಿದ್ದೇನೆ. ಅವನು ರಾಜನ ಕನಸನ್ನೂ ಅದರ ಅರ್ಥವನ್ನೂ ತಿಳಿಸುತ್ತಾನೆ '' ಎಂದನು.

[26]ಅರಸನು ದಾನಿಯೇಲನಿಗೆ (ಬೇಲ್ತೆಶಚ್ಚರನಿಗೆ), ''ನೀನು ನನ್ನ ಕನಸನ್ನೂ ಅದರ ಅರ್ಥವನ್ನೂ ಹೇಳಬಲ್ಲೆಯಾ?'' ಎಂದು ಕೇಳಿದನು.

[27]ದಾನಿಯೇಲನು, ''ಅರಸನಾದ ನೆಬೂಕದ್ನೆಚ್ಚರನೇ, ಯಾವ ವಿದ್ವಾಂಸರಾಗಲಿ, ಮಾಟಗಾರರಾಗಲಿ, ಜೋಯಿಸರಾಗಲಿ, ಶಕುನದವರಾಗಲಿ ರಾಜನಿಗೆ ರಹಸ್ಯವನ್ನು ಹೇಳಲಾಗಲಿಲ್ಲ. [28]ಆದರೆ ಪರಲೋಕದಲ್ಲಿ ಯೆಹೋವನು ಎಂಬಾತನಿದ್ದಾನೆ. ಆತನು ರಹಸ್ಯಗಳನ್ನು ಹೇಳುತ್ತಾನೆ. ಭವಿಷ್ಯದಲ್ಲಿ ನಡೆಯಲಿರುವುದನ್ನು ರಾಜನಿಗೆ ಯೆಹೋವನು ತಿಳಿಯಪಡಿಸಿದ್ದಾನೆ. ಇದೇ ನೀನು ಕಂಡ ಕನಸು, ನೀನು ಹಾಸಿಗೆಯ ಮೇಲೆ ಮಲಗಿದ್ದಾಗ

ಕಂಡ ಸಂಗತಿಗಳು ಇವು: 29ಅರಸನೇ, ನೀನು ನಿನ್ನ
ಹಾಸಿಗೆಯ ಮೇಲೆ ಮಲಗಿಕೊಂಡಿದ್ದೆ. ಭವಿಷ್ಯದಲ್ಲಿ
ಸಂಭವಿಸುವುದರ ಬಗ್ಗೆ ಆಲೋಚಿಸತೊಡಗಿದ್ದೆ. ದೇವರು
ಜನರಿಗೆ ರಹಸ್ಯವನ್ನು ತಿಳಿಸಬಲ್ಲನು. ಭವಿಷ್ಯದಲ್ಲಿ ನಡೆ
ಯಲಿರುವುದನ್ನು ಆತನೇ ನಿನಗೆ ತೋರಿಸಿದನು.
30ದೇವರು ರಹಸ್ಯವನ್ನು ನನಗೂ ತಿಳಿಸಿದ್ದಾನೆ! ದೇವರು
ನನಗೆ ತಿಳಿಸಿರುವುದು ನಾನು ಬೇರೆಯವರಿಗಿಂತ ಹೆಚ್ಚು
ಬುದ್ಧಿವಂತನೆಂದಲ್ಲ. ಆದರೆ ಅರಸನಾದ ನಿನಗೆ ಇದರ
ಅರ್ಥ ತಿಳಿಯಲಿ ಎಂಬ ಉದ್ದೇಶದಿಂದ ದೇವರು ನನಗೆ
ತಿಳಿಸಿದ್ದಾನೆ. ಇದರಿಂದ ನಿನ್ನ ಮನಸ್ಸಿನ ಯೋಚನೆಗಳ
ವಿಷಯ ನಿನಗೆ ತಿಳಿದುಬರುತ್ತದೆ.

31“ಅರಸನೇ, ನಿನ್ನ ಕನಸಿನಲ್ಲಿ ನಿನ್ನ ಎದುರಿಗೆ ಒಂದು
ದೊಡ್ಡ ಪ್ರತಿಮೆಯನ್ನು ಕಂಡೆ. ಅದು ಬಹಳ ದೊಡ್ಡ
ದಾಗಿಯೂ ಪ್ರಕಾಶಮಾನವಾಗಿಯೂ ಪ್ರಭಾವಶಾಲಿ
ಯಾಗಿಯೂ ಇತ್ತು. ನೋಡಿದವರು ಆಶ್ಚರ್ಯಚಕಿತ
ರಾಗಿ ಕಣ್ಣರಳಿಸುವಂತಿತ್ತು. 32ಆ ಪ್ರತಿಮೆಯ ತಲೆಯನ್ನು
ಚೊಕ್ಕ ಚಿನ್ನದಿಂದ ಮಾಡಲಾಗಿತ್ತು. ಅದರ ಎದೆ ಮತ್ತು
ತೋಳುಗಳು ಬೆಳ್ಳಿಯಿಂದ ಮಾಡಲ್ಪಟ್ಟಿದ್ದವು. ಆ ಪ್ರತಿ
ಮೆಯ ಹೊಟ್ಟೆ, ಸೊಂಟ ಮತ್ತು ತೊಡೆಗಳು ಕಂಚಿನಿಂದ
ಮಾಡಲ್ಪಟ್ಟಿದ್ದವು. 33ಕಾಲುಗಳು ಕಬ್ಬಿಣದಿಂದ ಮಾಡಲ್ಪ
ಟ್ಟಿದ್ದವು. ಆ ಪ್ರತಿಮೆಯ ಪಾದಗಳು ಕಬ್ಬಿಣ ಮತ್ತು ಜೇಡಿ
ಮಣ್ಣಿನಿಂದ ಮಾಡಲಾಗಿದ್ದವು. 34ನೀನು ಆ ಪ್ರತಿಮೆ
ಯನ್ನು ನೋಡುತ್ತಿದ್ದಾಗ ನಿನಗೊಂದು ಬಂಡೆಯು ಕಾಣಿ
ಸಿತು. ಆ ಬಂಡೆಯು ತನ್ನಷ್ಟಕ್ಕೆ ತಾನೇ ಸಡಿಲಗೊಂಡಿತು;
ಯಾರೂ ಅದನ್ನು ಒಡೆಯಲಿಲ್ಲ. ಆಮೇಲೆ ಆ ಬಂಡೆಯು
ಗಾಳಿಯಲ್ಲಿ ಹಾರಿಬಂದು ಆ ಪ್ರತಿಮೆಯ ಕಬ್ಬಿಣ ಮತ್ತು
ಮಣ್ಣಿನ ಪಾದಗಳಿಗೆ ಅಪ್ಪಳಿಸಿತು. ಆ ಬಂಡೆಯು
ಪ್ರತಿಮೆಯ ಪಾದಗಳನ್ನು ಒಡೆದು ಪುಡಿಪುಡಿ ಮಾಡಿತು.
35ಆಮೇಲೆ ಕಬ್ಬಿಣ, ಮಣ್ಣು, ಕಂಚು, ಬೆಳ್ಳಿ, ಚಿನ್ನ ಎಲ್ಲವೂ
ಏಕಕಾಲಕ್ಕೆ ಒಡೆದು ಚೂರುಚೂರಾದವು. ಆ ಚೂರುಗ
ಳೆಲ್ಲ ಬೇಸಿಗೆಕಾಲದ ಕಣದಲ್ಲಿನ ಹೊಟ್ಟಿನಂತಾದವು.
ಗಾಳಿಯು ಆ ಚೂರುಗಳನ್ನು ಹಾರಿಸಿಕೊಂಡು
ಹೋಯಿತು. ಅಲ್ಲಿ ಏನೂ ಉಳಿಯಲಿಲ್ಲ. ಹಿಂದೆಂದೂ
ಅಲ್ಲೊಂದು ಪ್ರತಿಮೆ ಇತ್ತೆಂದು ಯಾರೂ ಹೇಳುವಂತಿರ
ಲಿಲ್ಲ. ಆಮೇಲೆ ಆ ಪ್ರತಿಮೆಗೆ ಅಪ್ಪಳಿಸಿದ ಬಂಡೆಯು
ಒಂದು ದೊಡ್ಡ ಪರ್ವತವಾಗಿ ಇಡೀ ಭೂಮಂಡಲವನ್ನು
ವ್ಯಾಪಿಸಿತು.

36“ಇದೇ ನಿನ್ನ ಕನಸು. ಈಗ ನಾನು ನಿನಗೆ ಅದರ
ಅರ್ಥವನ್ನು ಹೇಳುತ್ತೇನೆ.

37ರಾಜನೇ, ನೀನು ರಾಜಾಧಿ ರಾಜ. ಪರಲೋಕದ
ದೇವರು ನಿನಗೆ ರಾಜ್ಯ, ಬಲ, ಪರಾಕ್ರಮ ಮತ್ತು ವೈಭವ
ಗಳನ್ನು ದಯಪಾಲಿಸಿದ್ದಾನೆ. 38ದೇವರು ನಿನಗೆ ಅಧಿಕಾರ
ವನ್ನು ಕೊಟ್ಟಿದ್ದಾನೆ. ಆ ದೇವರು ನಿನ್ನನ್ನು ಎಲ್ಲೆಡೆಯ
ಲ್ಲಿರುವ ಜನರ ಮೇಲೆ, ಕಾಡುಪ್ರಾಣಿಗಳ ಮೇಲೆ, ಪಕ್ಷಿಗಳ
ಮೇಲೆ ಆಳುವಂತೆ ಮಾಡಿದ್ದಾನೆ. ರಾಜನಾದ
ನೆಬೂಕದ್ನೆಚ್ಚರನೇ, ನೀನೇ ಆ ಪ್ರತಿಮೆಯ ಬಂಗಾರದ
ತಲೆ.

39“ನಿನ್ನ ಕಾಲವಾದ ಮೇಲೆ ಮತ್ತೊಂದು ರಾಜ್ಯ
ವುಂಟಾಗುವುದು. ಅದು ಬೆಳ್ಳಿಯ ಭಾಗ. ಆದರೆ ಆ
ರಾಜ್ಯವು ನಿನ್ನ ರಾಜ್ಯದಷ್ಟು ದೊಡ್ಡದಾಗಿರುವುದಿಲ್ಲ. ಆ
ತರುವಾಯ ಬೇರೊಂದು ಮೂರನೇ ರಾಜ್ಯವು ಈ
ಭೂಮಿಯ ಮೇಲೆ ಆಳ್ವಿಕೆ ಮಾಡುವುದು. ಅದು ಕಂಚಿನ
ಭಾಗ. 40ಆಮೇಲೆ ನಾಲ್ಕನೆಯ ರಾಜ್ಯ. ಆ ರಾಜ್ಯವು
ಕಬ್ಬಿಣದಂತೆ ಗಟ್ಟಿಯಾಗಿರುತ್ತದೆ. ಹೇಗೆ ಕಬ್ಬಿಣವು ಎಲ್ಲ
ವಸ್ತುಗಳನ್ನು ಒಡೆದು ಪುಡಿ ಮಾಡುತ್ತದೆಯೋ ಹಾಗೆಯೇ
ಆ ನಾಲ್ಕನೆಯ ರಾಜ್ಯವು ಉಳಿದೆಲ್ಲ ರಾಜ್ಯಗಳನ್ನು ಒಡೆದು
ಪುಡಿ ಮಾಡುತ್ತದೆ.

41“ಆ ಪ್ರತಿಮೆಯ ಪಾದಗಳು ಮತ್ತು ಕಾಲ್ಬೆರಳುಗಳು
ಕಬ್ಬಿಣ ಮತ್ತು ಜೇಡಿಮಣ್ಣಿನಿಂದ ಮಾಡಿದ್ದನ್ನು ನೀನು
ನೋಡಿರುವೆ. ನಾಲ್ಕನೆಯ ರಾಜ್ಯವು ವಿಭಜಿತ ರಾಜ್ಯ
ವಾಗುವದೆಂದು ಇದರ ಅರ್ಥ. ನೀನು ನೋಡಿದಂತೆ
ಕಬ್ಬಿಣವು ಜೇಡಿಮಣ್ಣಿನಲ್ಲಿ ಬೆರೆತದ್ದರಿಂದ ಅದರಲ್ಲಿ
ಕಬ್ಬಿಣದ ಗಟ್ಟಿತನ ಸ್ವಲ್ಪ ಇರುತ್ತದೆ. 42ಆ ಪ್ರತಿಮೆಯ
ಕಾಲ್ಬೆರಳುಗಳ ಒಂದಂಶ ಕಬ್ಬಿಣ ಮತ್ತೊಂದು ಅಂಶ
ಜೇಡಿಮಣ್ಣಾಗಿದ್ದಂತೆ ಆ ರಾಜ್ಯದ ಒಂದಂಶವು ಕಬ್ಬಿಣ
ದಂತೆ ಗಟ್ಟಿ, ಇನ್ನೊಂದು ಅಂಶವು ಜೇಡಿಮಣ್ಣಿನಂತೆ
ದುರ್ಬಲವಾಗಿರುತ್ತದೆ. 43ಕಬ್ಬಿಣ ಮತ್ತು ಜೇಡಿಮಣ್ಣು
ಬೆರೆಸಿದ್ದನ್ನು ನೀನು ನೋಡಿರುವೆ. ಆದರೆ ಕಬ್ಬಿಣ ಮತ್ತು
ಜೇಡಿಮಣ್ಣು ಸಂಪೂರ್ಣವಾಗಿ ಪರಸ್ಪರ ಬೆರೆಯುವ
ದಿಲ್ಲ. ಅದೇ ರೀತಿ ನಾಲ್ಕನೇ ರಾಜ್ಯದ ಜನರು ಪರಸ್ಪರ
ಕೂಡಿದ್ದರೂ ಸಹ ಒಂದೇ ಜನರಲ್ಲಿರಬೇಕಾದ ಏಕತೆ
ಅವರಲ್ಲಿರುವದಿಲ್ಲ.

44“ನಾಲ್ಕನೇ ರಾಜ್ಯದ ರಾಜರ ಕಾಲದಲ್ಲಿ ಪರ
ಲೋಕದ ದೇವರು ಇನ್ನೊಂದು ಹೊಸ ಸಾಮ್ರಾಜ್ಯವನ್ನು
ಸ್ಥಾಪಿಸುವನು. ಈ ಸಾಮ್ರಾಜ್ಯವು ಎಂದೆಂದಿಗೂ ಉಳಿ
ಯುವದು. ಎಂದಿಗೂ ಅಳಿಯದು; ಬೇರೊಂದು ಜನರ
ಗುಂಪಿಗೆ ಹೋಗದಂಥ ಸಾಮ್ರಾಜ್ಯವಾಗಿರುವುದು. ಈ
ಸಾಮ್ರಾಜ್ಯವು ಉಳಿದೆಲ್ಲ ಸಾಮ್ರಾಜ್ಯಗಳನ್ನು ನಾಶಮಾಡಿ
ಕೊನೆಗಾಣಿಸುವುದು. ಆದರೆ ಆ ಸಾಮ್ರಾಜ್ಯವು ಮಾತ್ರ
ಶಾಶ್ವತವಾಗಿ ನಿಲ್ಲುವದು.

45“ಅರಸನಾದ ನೆಬೂಕದ್ನೆಚ್ಚರನೇ, ಬೆಟ್ಟದಿಂದ
ಒಂದು ದೊಡ್ಡ ಬಂಡೆ ಒಡೆದುಬಂದದ್ದನ್ನು ನೀನು
ನೋಡಿದೆ. ಯಾರೂ ಅದನ್ನು ಒಡೆಯಲಿಲ್ಲ! ಆ
ಬಂಡೆಯು ಕಬ್ಬಿಣವನ್ನು, ಕಂಚನ್ನು, ಜೇಡಿಮಣ್ಣನ್ನು,

ಬೆಳ್ಳಿಯನ್ನು, ಚಿನ್ನವನ್ನು ಚೂರುಚೂರು ಮಾಡಿತು.
ಭವಿಷ್ಯದಲ್ಲಿ ಏನಾಗುವದೆಂಬುದನ್ನು ದೇವರು ನಿನಗೆ ಈ
ರೀತಿಯಲ್ಲಿ ತೋರಿಸಿದ್ದಾನೆ. ನಿನ್ನ ಕನಸು ನಿಜ. ಅದರ
ಅರ್ಥವು ನಂಬಿಕೆಗೆ ಯೋಗ್ಯವಾಗಿದೆ '' ಎಂದು
ವಿವರಿಸಿದನು.

46ಆಗ ರಾಜನಾದ ನೆಬೂಕದ್ನೆಚ್ಚರನು ದಾನಿಯೇಲನ
ಮುಂದೆ ಅಡ್ಡಬಿದ್ದು ಅವನನ್ನು ಹೊಗಳಿದನು; ಅವನ
ಗೌರವಾರ್ಥವಾಗಿ ಧೂಪಹಾಕಿ ನೈವೇದ್ಯ ಮಾಡ
ಬೇಕೆಂದು ಆಜ್ಞಾಪಿಸಿದನು. ಆಮೇಲೆ ಅರಸನು ದಾನಿ
ಯೇಲನಿಗೆ, 47''ನಿನ್ನ ದೇವರು ಸರ್ವಶ್ರೇಷ್ಠನು ಮತ್ತು
ಪ್ರಬಲನು ಎನ್ನುವದು ನನಗೆ ಖಚಿತವಾಯಿತು. ಆತನು
ಎಲ್ಲ ಅರಸರ ಒಡೆಯನಾಗಿದ್ದಾನೆ. ಆತನು ಜನರಿಗೆ
ನಿಗೂಢವಾಗಿದ್ದ ರಹಸ್ಯವನ್ನು ತಿಳಿಸುತ್ತಾನೆ. ನೀನು ನನಗೆ
ಈ ರಸಹ್ಯವನ್ನು ತಿಳಿಸಲು ಸಮರ್ಥನಾದುದರಿಂದ ಇದೆಲ್ಲ
ನಿಜವೆಂದು ನಾನು ನಂಬುತ್ತೇನೆ '' ಎಂದು ಹೇಳಿದನು.

48ತರುವಾಯ ಅರಸನು ದಾನಿಯೇಲನಿಗೆ ತನ್ನ ರಾಜ್ಯ
ದಲ್ಲಿ ಬಹುಮುಖ್ಯವಾದ ಉದ್ಯೋಗವನ್ನು ಕೊಟ್ಟನು.
ಅಮೂಲ್ಯವಾದ ಕಾಣಿಕೆಗಳನ್ನೂ ಕೊಟ್ಟನು. ನೆಬೂಕ
ದ್ನೆಚ್ಚರನು ದಾನಿಯೇಲನನ್ನು ಬಾಬಿಲೋನ್ ಸಂಸ್ಥಾನದ
ಅಧಿಪತಿಯನ್ನಾಗಿ ಮಾಡಿದನು. ಬಾಬಿಲೋನಿನ ಎಲ್ಲಾ
ವಿದ್ವಾಂಸರ ಮುಖ್ಯಸ್ಥನನ್ನಾಗಿ ಮಾಡಿದನು. 49ಶದ್ರಕ್,
ಮೇಶಕ್,ಅಬೇದ್‌ನೆಗೋ ಇವರುಗಳನ್ನು ಬಾಬೆಲ್
ಸಂಸ್ಥಾನದ ದೊಡ್ಡ ಅಧಿಕಾರಿಗಳನ್ನಾಗಿ ನೇಮಿಸ
ಬೇಕೆಂದು ದಾನಿಯೇಲನು ಅರಸನನ್ನು ಕೇಳಿಕೊಂಡನು.
ದಾನಿಯೇಲನು ಹೇಳಿದಂತೆ ಅರಸನು ಮಾಡಿದನು.
ದಾನಿಯೇಲನು ಅರಸನ ಸನ್ನಿಧಿಯಲ್ಲಿರುವ ಪ್ರಮುಖ
ರಲ್ಲಿ ಒಬ್ಬನಾದನು.

## ಬಂಗಾರದ ವಿಗ್ರಹ ಮತ್ತು ಉರಿಯುವ ಕುಲುಮೆ

3 ಅರಸನಾದ ನೆಬೂಕದ್ನೆಚ್ಚರನು ಒಂದು ಬಂಗಾರದ
ವಿಗ್ರಹವನ್ನು ಮಾಡಿಸಿದ್ದನು. ಆ ವಿಗ್ರಹವು ಅರವತ್ತು
ಮೊಳ ಎತ್ತರವಾಗಿತ್ತು: ಆರು ಮೊಳ ಅಗಲವಾಗಿತ್ತು. ಆ
ವಿಗ್ರಹವನ್ನು ಬಾಬಿಲೋನ್ ಪ್ರಾಂತ್ಯದ ದೂರಾ ಎಂಬ
ಬಯಲಿನಲ್ಲಿ ನಿಲ್ಲಿಸಿದನು. 2ಅರಸನು ಆ ವಿಗ್ರಹದ ಪ್ರತಿ
ಷ್ಠಾಪನೆಯ ಮಹೋತ್ಸವಕ್ಕೆ ಉಪರಾಜರನ್ನು, ನಾಯಕ
ರನ್ನು, ದೇಶಾಧಿಪತಿಗಳನ್ನು, ಮಂತ್ರಿಗಳನ್ನು, ಕೋಶಾಧ್ಯ
ಕ್ಷರನ್ನು, ನ್ಯಾಯಾಧಿಪತಿಗಳನ್ನು ಮತ್ತು ಉಳಿದೆಲ್ಲ ಅಧಿ
ಕಾರಿಗಳನ್ನು ಕರೆಸಿದನು.

3ಅವರೆಲ್ಲರು ಬಂದು ಅರಸನಾದ ನೆಬೂಕದ್ನೆಚ್ಚರನು
ನಿಲ್ಲಿಸಿದ ವಿಗ್ರಹದ ಎದುರಿಗೆ ನಿಂತುಕೊಂಡರು. 4ಆಗ
ಸಾರುವವನು ದೊಡ್ಡ ಧ್ವನಿಯಲ್ಲಿ, ''ವಿವಿಧ ಜನಾಂಗ
ಕುಲ ಭಾಷೆಗಳ ಜನರೇ, ನಾನು ಹೇಳುವದನ್ನು ಕೇಳಿರಿ.
5ವಾದ್ಯಗಳ ಧ್ವನಿಯನ್ನು ಕೇಳಿದ ಕೂಡಲೆ ನೀವು ಅಡ್ಡ
ಬೀಳಬೇಕು. ಇದು ರಾಜಾಜ್ಞೆ. ತುತ್ತೂರಿ, ಕೊಳಲು,
ಕಿನ್ನರಿ, ತಂಬೂರಿ, ವೀಣೆ, ವಾಲಗ ಮುಂತಾದ ಸಕಲ
ವಾದ್ಯಗಳ ಧ್ವನಿಯನ್ನು ಕೇಳಿದ ಕೂಡಲೆ ನೀವು
ಬಂಗಾರದ ವಿಗ್ರಹವನ್ನು ಪೂಜಿಸಬೇಕು. ಅರಸನಾದ
ನೆಬೂಕದ್ನೆಚ್ಚರನು ಈ ವಿಗ್ರಹವನ್ನು ನಿಲ್ಲಿಸಿದ್ದಾನೆ.
6ಯಾರಾದರೂ ಈ ಬಂಗಾರದ ವಿಗ್ರಹಕ್ಕೆ ಅಡ್ಡಬೀಳ
ದಿದ್ದರೆ ಮತ್ತು ಪೂಜಿಸದಿದ್ದರೆ ತಕ್ಷಣ ಅವರನ್ನು ಬೆಂಕಿಯ
ಕೊಂಡಕ್ಕೆ ಎಸೆಯಲಾಗುವುದು '' ಎಂದು ಸಾರಿದನು.

7ಆದುದರಿಂದ ತುತ್ತೂರಿ, ಕೊಳಲು,ಕಿನ್ನರಿ, ತಂಬೂರಿ,
ವೀಣೆ ಮುಂತಾದ ಸಕಲ ವಾದ್ಯಗಳ ಧ್ವನಿ ಯನ್ನು ಕೇಳಿದ
ಕೂಡಲೆ ಅವರು ಅಡ್ಡಬಿದ್ದು ಬಂಗಾರದ ವಿಗ್ರಹವನ್ನು
ಪೂಜಿಸಿದರು. ರಾಜನಾದ ನೆಬೂಕದ್ನೆಚ್ಚ ರನು ನಿಲ್ಲಿಸಿದ
ವಿಗ್ರಹವನ್ನು ಎಲ್ಲ ಜನಾಂಗಗಳ, ಭಾಷೆ ಗಳ ಜನರು
ಪೂಜಿಸಿದರು.

8ಆಗ ಕೆಲವು ಜನ ಕಲ್ದೀಯರು ರಾಜನ ಬಳಿಗೆ ಬಂದು
ಅವರು ಯೆಹೂದ್ಯರ ವಿರುದ್ಧ ಮಾತನಾಡ ತೊಡಗಿದರು.
9ರಾಜನಾದ ನೆಬೂಕದ್ನೆಚ್ಚರನಿಗೆ ಅವರು, ''ಮಹಾ
ರಾಜನೇ, ಚಿರಂಜೀವಿಯಾಗಿರು! 10ಅರಸನೇ, ತುತ್ತೂರಿ,
ಕೊಳಲು, ಕಿನ್ನರಿ, ತಂಬೂರಿ, ವೀಣೆ,ವಾಲಗ ಮುಂತಾದ
ಸಕಲ ವಾದ್ಯಗಳ ಧ್ವನಿಯನ್ನು ಕೇಳಿದ ಪ್ರತಿಯೊಬ್ಬನೂ
ಅಡ್ಡಬಿದ್ದು ಬಂಗಾರದ ವಿಗ್ರಹವನ್ನು ಪೂಜಿಸಬೇಕು
ಎಂದು ತಾವು ಆಜ್ಞೆ ಕೊಟ್ಟಿದ್ದೀರಿ. 11ಯಾರಾದರೂ ಅಡ್ಡ
ಬಿದ್ದು ಬಂಗಾರದ ವಿಗ್ರಹವನ್ನು ಪೂಜಿಸದಿದ್ದರೆ ಅವರನ್ನು
ಉರಿಯುವ ಬೆಂಕಿಯ ಕೊಂಡದಲ್ಲಿ ಎಸೆಯಲಾಗುವ
ದೆಂದು ಕೂಡ ತಾವು ಹೇಳಿದ್ದೀರಿ. 12ಅರಸೇ, ಕೆಲವು ಜನ
ಯೆಹೂದ್ಯರು ತಮ್ಮ ಆಜ್ಞೆಯನ್ನು ಪಾಲಿಸಲಿಲ್ಲ. ಆ
ಯೆಹೂದ್ಯರನ್ನು ತಾವು ಬಾಬಿಲೋನ್ ಪ್ರಾಂತ್ಯದಲ್ಲಿ
ಪ್ರಮುಖ ಅಧಿಕಾರಿಗಳನ್ನಾಗಿ ನೇಮಿಸಿದ್ದೀರಿ. ಅವರ
ಹೆಸರುಗಳು, ಶದ್ರಕ್, ಮೇಶಕ್, ಅಬೇದ್‌ನೆಗೋ
ಎಂದು. ಅವರು ನಿಮ್ಮ ದೇವರುಗಳನ್ನು ಪೂಜಿಸುವು
ದಿಲ್ಲ. ನೀವು ನಿಲ್ಲಿಸಿದ ಬಂಗಾರದ ವಿಗ್ರಹಕ್ಕೆ ಅಡ್ಡಬಿದ್ದು
ಪೂಜಿಸುವದಿಲ್ಲ'' ಎಂದು ಚಾಡಿ ಹೇಳಿದರು.

13ನೆಬೂಕದ್ನೆಚ್ಚರನಿಗೆ ಬಹಳ ಕೋಪ ಬಂತು. ಅವನು
ಶದ್ರಕ್, ಮೇಶಕ್, ಅಬೇದ್‌ನೆಗೋ ಇವರುಗಳನ್ನು
ಕರೆಸಿದನು. ಅವರನ್ನು ಅರಸನ ಬಳಿಗೆ ಕರೆದುತರ
ಲಾಯಿತು. 14ನೆಬೂಕದ್ನೆಚ್ಚರನು ಅವರಿಗೆ, ''ಶದ್ರಕ್,
ಮೇಶಕ್, ಅಬೇದ್‌ನೆಗೋ, ನೀವು ನನ್ನ ದೇವರುಗಳನ್ನು
ಪೂಜಿಸುವುದಿಲ್ಲವಂತೆ, ಇದು ನಿಜವೇ? ನಾನು ನಿಲ್ಲಿಸಿದ
ಬಂಗಾರದ ವಿಗ್ರಹವನ್ನು ನೀವು ಅಡ್ಡಬಿದ್ದು ಪೂಜಿಸಲಿಲ್ಲ
ವಂತೆ, ಇದು ನಿಜವೇ? 15ಈಗಲಾದರೋ ತುತ್ತೂರಿ,
ಕೊಳಲು, ಕಿನ್ನರಿ, ತಂಬೂರಿ, ವೀಣೆ, ವಾಲಗ ಮುಂತಾದ

ಸಕಲ ವಾದ್ಯಗಳ ಧ್ವನಿಯನ್ನು ಕೇಳಿದ ಕೂಡಲೆ ನೀವು
ಅಡ್ಡ ಬಿದ್ದು ಚಿನ್ನದ ವಿಗ್ರಹವನ್ನು ಪೂಜಿಸಬೇಕು. ನಾನು
ಮಾಡಿಸಿದ ಈ ವಿಗ್ರಹವನ್ನು ಪೂಜಿಸಲು ನೀವು ಸಿದ್ಧರಾಗಿ
ದ್ದರೆ ಸರಿ. ನೀವು ಅದನ್ನು ಪೂಜಿಸದಿದ್ದರೆ ತಕ್ಷಣ ನಿಮ್ಮನ್ನು
ಉರಿಯುವ ಕೊಂಡದಲ್ಲಿ ಎಸೆಯಲಾಗುವುದು. ಆಗ ನನ್ನ
ಕೈಯಿಂದ ನಿಮ್ಮನ್ನು ಬಿಡಿಸುವುದು ಯಾವ ದೇವ ರಿಗೂ
ಸಾಧ್ಯವಾಗಲಾರದು’’ಎಂದು ಹೇಳಿದನು.
16ಇದನ್ನು ಕೇಳಿ ಶದ್ರಕ್, ಮೇಶಕ್, ಅಬೇದ್‌ನೆಗೋ
ಎಂಬುವವರು ರಾಜನಿಗೆ, ‘‘ನೆಬೂಕದ್ನೆಚ್ಚರನೇ, ಈ
ವಿಷಯದಲ್ಲಿ ನಾವು ನಿನಗೆ ಏನೂ ಹೇಳಬೇಕಾಗಿಲ್ಲ.
17ನೀನು ನಮ್ಮನ್ನು ಉರಿಯುವ ಕೊಂಡದಲ್ಲಿ ಎಸೆದರೆ
ನಾವು ಆರಾಧಿಸುವ ದೇವರು ನಮ್ಮನ್ನು ರಕ್ಷಿಸಬಲ್ಲನು.
ಆತನು ಇಚ್ಛಿಸಿದರೆ ನಮ್ಮನ್ನು ನಿನ್ನ ಕೈಯಿಂದ ಬಿಡಿಸ
ಬಲ್ಲನು.
18ರಾಜನೇ, ಒಂದು ವೇಳೆ ದೇವರು ನಮ್ಮನ್ನು
ರಕ್ಷಿಸದಿದ್ದರೂ ನಾವು ನಿನ್ನ ದೇವರುಗಳನ್ನು ಪೂಜಿಸುವ
ದಿಲ್ಲ. ನೀನು ನಿಲ್ಲಿಸಿದ ಬಂಗಾರದ ವಿಗ್ರಹವನ್ನು ಪೂಜಿಸು
ವದಿಲ್ಲ. ಇದು ನಿನಗೆ ತಿಳಿದಿರಲಿ’’ಎಂದು ಖಂಡಿತವಾಗಿ
ಹೇಳಿದರು.
19ಆಗ ನೆಬೂಕದ್ನೆಚ್ಚರನಿಗೆ ಬಹಳ ಕೋಪ ಬಂತು.
ಶದ್ರಕ್, ಮೇಶಕ್, ಅಬೇದ್‌ನೆಗೋ ಅವರ ವಿರುದ್ಧ
ವಾಗಿ ಅವನ ಮುಖಭಾವವು ಕೆರಳಿತು. ಕುಲುಮೆಯನ್ನು
ಏಳರಷ್ಟು ಹೆಚ್ಚಾಗಿ ಉರಿಸಬೇಕೆಂದು ಆಜ್ಞಾಪಿಸಿದನು.
20ಆಮೇಲೆ ನೆಬೂಕದ್ನೆಚ್ಚರನು, ಶದ್ರಕ್, ಮೇಶಕ್,
ಅಬೇದ್‌ನೆಗೋ ಇವರುಗಳನ್ನು ಬಂಧಿಸಿ ಉರಿಯುವ
ಕೊಂಡದಲ್ಲಿ ಎಸೆಯಬೇಕೆಂದು ತನ್ನ ಸೈನ್ಯದಲ್ಲಿದ್ದ ಅತಿ
ಬಲಶಾಲಿಗಳಾದ ಕೆಲವರಿಗೆ ಆಜ್ಞಾಪಿಸಿದನು.
21ಅವರು ಶದ್ರಕ್, ಮೇಶಕ್, ಅಬೇದ್‌ನೆಗೋ ಎಂಬ
ವರನ್ನು ಚೆನ್ನಾಗಿ ಬಿಗಿದುಕಟ್ಟಿ ಉರಿಯುವ ಕೊಂಡದಲ್ಲಿ
ಎಸೆದರು. ಅವರು ತಮ್ಮ ಶಲ್ಯ, ಇಜಾರು, ಟೊಪ್ಪಿಗೆ ಮೊದ
ಲಾದ ಉಡುಪನ್ನು ಧರಿಸಿಕೊಂಡಿದ್ದರು. 22ಆಜ್ಞೆಯನ್ನು
ಕೊಟ್ಟಾಗ ರಾಜನು ತುಂಬ ಕೋಪದಲ್ಲಿದ್ದನು. ಆದುದ
ರಿಂದ ತಕ್ಷಣ ಕುಲುಮೆಯಲ್ಲಿ ಅತಿ ಹೆಚ್ಚು ಬೆಂಕಿಯನ್ನು
ಉರಿಸಲಾಯಿತು. ಆ ಜ್ವಾಲೆ ಎಷ್ಟು ಭಯಂಕರವಾಗಿ
ತ್ತೆಂದರೆ ಶದ್ರಕ್, ಮೇಶಕ್, ಅಬೇದ್‌ನೆಗೋ ಇವರು
ಗಳನ್ನು ಕುಲುಮೆಯಲ್ಲಿ ಎಸೆಯಲು ಹೋದ ಶಕ್ತಿಶಾಲಿಗ
ಳಾದ ಸೈನಿಕರೇ ಅದರ ತಾಪಕ್ಕೆ ಸತ್ತುಹೋದರು.
23ಶದ್ರಕ್, ಮೇಶಕ್, ಅಬೇದ್‌ನೆಗೋ ಈ ಮೂವರು
ಕಟ್ಟಲ್ಪಟ್ಟವರಾಗಿ ಧಗಧಗನೆ ಉರಿಯುವ ಬೆಂಕಿಯಲ್ಲಿ
ಬಿದ್ದುಬಿಟ್ಟರು.
24ಅರಸನಾದ ನೆಬೂಕದ್ನೆಚ್ಚರನು ಬೆಚ್ಚಿ ತಟ್ಟನೆ ಎದ್ದು
ನಿಂತನು. ಅವನು ಆಶ್ಚರ್ಯಚಕಿತನಾಗಿ ತನ್ನ ಮಂತ್ರಿ
ಗಳನ್ನು, ‘‘ನಾವು ಕೇವಲ ಮೂರು ಜನರನ್ನು ಕಟ್ಟಿದೆವು:
ಕೇವಲ ಮೂರು ಜನರನ್ನು ಬೆಂಕಿಯಲ್ಲಿ ಎಸೆದೆವು. ಇದು
ಸರಿ ತಾನೆ?’’ ಎಂದು ಕೇಳಿದನು.
ಅವನ ಮಂತ್ರಿಗಳು, ‘‘ಹೌದು, ಮಹಾರಾಜನೇ’’
ಎಂದು ಉತ್ತರಿಸಿದರು.
25ಆಗ ಅರಸನು, ‘‘ನೋಡಿರಿ, ನಾಲ್ಕು ಜನರು ಬೆಂಕಿ
ಯಲ್ಲಿ ತಿರುಗಾಡುತ್ತಿರುವುದು ನನಗೆ ಕಾಣುತ್ತಿದೆ. ಅವರು
ಕಟ್ಟಲ್ಪಟ್ಟಿಲ್ಲ. ಅವರನ್ನು ಬೆಂಕಿಯು ಸುಟ್ಟಿಲ್ಲ. ನಾಲ್ಕನೆಯ
ವನು ದೇವಕುಮಾರನಂತೆ ಕಾಣುತ್ತಾನೆ ’’ ಎಂದು
ಹೇಳಿದನು.
26ಆಗ ನೆಬೂಕದ್ನೆಚ್ಚರನು ಉರಿಯುವ ಕೊಂಡದ
ಬಾಯಿಯ ಬಳಿಗೆ ಹೋಗಿ, ‘‘ಮಹೋನ್ನತನಾದ ದೇವರ
ಸೇವಕರಾದ ಶದ್ರಕ್, ಮೇಶಕ್, ಅಬೇದ್‌ನೆಗೋ
ಎಂಬವರೇ ಬನ್ನಿ, ಹೊರಗೆ ಬನ್ನಿ ’’ ಎಂದು ಕೂಗಿದನು.
ಶದ್ರಕ್, ಮೇಶಕ್, ಅಬೇದ್‌ನೆಗೋ ಈ ಮೂವರು
ಬೆಂಕಿಯೊಳಗಿಂದ ಹೊರಗೆ ಬಂದರು. 27ಅವರು ಹೊರಗೆ
ಬಂದ ಮೇಲೆ ಉಪರಾಜರು, ನಾಯಕರು,
ದೇಶಾಧಿಪತಿಗಳು, ಮಂತ್ರಿಗಳು ಮತ್ತು ಇತರರು ಅವರ
ಸುತ್ತಲೂ ನೆರೆದರು. ಶದ್ರಕ್, ಮೇಶಕ್, ಅಬೇದ್
ನೆಗೋ ಇವರುಗಳನ್ನು ಬೆಂಕಿಯು ಸುಟ್ಟಿಲ್ಲ. ಅವರ
ದೇಹಕ್ಕೆ ಬೆಂಕಿಯು ಮುಟ್ಟಿಲ್ಲ. ಅವರ ಕೂದಲಿಗೂ
ವಸ್ತ್ರಗಳಿಗೂ ಬೆಂಕಿಯು ತಾಕಿಲ್ಲ. ಬೆಂಕಿಯ ಸಮೀಪಕ್ಕೆ
ಹೋದ ವಾಸನೆಯೂ ಅವರಿಗೆ ಮುಟ್ಟಿಲ್ಲ ಎಂಬುದನ್ನು
ಅವರು ತಿಳಿದುಕೊಂಡರು.
28ಆಗ ನೆಬೂಕದ್ನೆಚ್ಚರನು, ‘‘ಶದ್ರಕ್, ಮೇಶಕ್,
ಅಬೇದ್‌ನೆಗೋ ಇವರುಗಳ ದೇವರಿಗೆ ಸ್ತೋತ್ರವಾಗಲಿ.
ಅವರ ದೇವರು ತನ್ನ ದೂತನನ್ನು ಕಳುಹಿಸಿ ತನ್ನ ಸೇವಕ
ರನ್ನು ಬೆಂಕಿಯಿಂದ ರಕ್ಷಿಸಿದ್ದಾನೆ. ಈ ಮೂರು ಜನರು
ತಮ್ಮ ದೇವರ ಮೇಲೆ ವಿಶ್ವಾಸವಿಟ್ಟರು. ಅವರು ನನ್ನ ಆಜ್ಞೆ
ಯನ್ನು ಪಾಲಿಸಲು ಒಪ್ಪಲಿಲ್ಲ. ಬೇರೆ ಯಾವ ದೇವರನ್ನೂ
ಪೂಜಿಸುವದಕ್ಕೆ ಅಥವಾ ಸೇವಿಸುವದಕ್ಕೆ ಬದಲಾಗಿ
ಸಾಯಲು ಅವರು ಸಿದ್ಧರಾಗಿದ್ದರು. 29ನಾನು ಈಗ ಸಕಲ
ಜನಾಂಗ, ಕುಲ, ಭಾಷೆಗಳ ಜನರಲ್ಲಿ ಯಾರಾದರೂ
ಶದ್ರಕ್, ಮೇಶಕ್, ಅಬೇದ್‌ನೆಗೋ ಇವರ ದೇವರ
ವಿರುದ್ಧವಾಗಿ ಮಾತನಾಡಿದರೆ ಅವರನ್ನು ತುಂಡು
ತುಂಡಾಗಿ ಕತ್ತರಿಸಿ ಅವರ ಮನೆಗಳನ್ನು ತಿಪ್ಪೆಯನ್ನಾಗಿ
ಮಾಡಬೇಕೆಂಬ ಆಜ್ಞೆಯನ್ನು ವಿಧಿಸುತ್ತೇನೆ. ಬೇರೆ ಯಾವ
ದೇವರೂ ತನ್ನ ಭಕ್ತರನ್ನು ಈ ರೀತಿ ರಕ್ಷಿಸಲಾರನು ’’
ಎಂದು ಹೇಳಿದನು.
30ಬಳಿಕ ರಾಜನು ಶದ್ರಕ್, ಮೇಶಕ್ ಮತ್ತು ಅಬೇದ್
ನೆಗೋ ಈ ಮೂವರಿಗೆ ಬಾಬಿಲೋನ್ ಸಂಸ್ಥಾನದಲ್ಲಿ
ಹೆಚ್ಚು ಮಹತ್ವದ ಪದವಿಗಳನ್ನು ಕೊಟ್ಟನು.

### ನೆಬೂಕದ್ನೆಚ್ಚರನಿಗೆ ಮರದ ಕನಸು

4 ಲೋಕದಲ್ಲೆಲ್ಲ ವಾಸಿಸುವ ಸಕಲ ಜನಾಂಗ, ಕುಲ,
ಭಾಷೆಗಳ ಜನರಿಗೆ ರಾಜನಾದ ನೆಬೂಕದ್ನೆಚ್ಚರನು
ಈ ಪತ್ರವನ್ನು ಕಳುಹಿಸಿದನು.

‘‘ಶುಭಾಶಯಗಳು.
2ಮಹೋನ್ನತನಾದ ದೇವರು ನನಗೋಸ್ಕರ
ಮಾಡಿದ ಸೂಚಕಕಾರ್ಯಗಳನ್ನು ಮತ್ತು ಅದ್ಭುತ
ಕಾರ್ಯಗಳನ್ನು ನಿಮಗೆ ತಿಳಿಸಲು ನನಗೆ ಬಹಳ
ಸಂತೋಷವಾಗುತ್ತದೆ.

3 ದೇವರು ಅಚ್ಚರಿಗೊಳಿಸುವ ಅದ್ಭುತಕಾರ್ಯ
ಗಳನ್ನು ಮಾಡಿದ್ದಾನೆ. ದೇವರು ಅದ್ಭುತ
ಕಾರ್ಯಗಳನ್ನು ಮಾಡಿದ್ದಾನೆ. ದೇವರ
ಸಾಮ್ರಾಜ್ಯವು ಶಾಶ್ವತವಾದದ್ದು. ದೇವರ
ಆಳ್ವಿಕೆಯು ಎಲ್ಲಾ ತಲೆಮಾರುಗಳಲ್ಲಿಯೂ
ಮುಂದುವರೆಯುವುದು.

4ನೆಬೂಕದ್ನೆಚ್ಚರನಾದ ನಾನು ಅರಮನೆ
ಯಲ್ಲಿದ್ದೆ; ಸುಖ ಸಂತೋಷದಿಂದ ಇದ್ದೆ. 5ಆಗ ನನ
ಗೊಂದು ಕನಸು ಬಿತ್ತು. ಅದು ನನ್ನಲ್ಲಿ ಭಯವ
ನ್ನುಂಟು ಮಾಡಿತು. ನಾನು ನನ್ನ ಹಾಸಿಗೆಯ
ಮೇಲೆ ಮಲಗಿದ್ದೆ. ಅನೇಕ ಚಿತ್ರಗಳನ್ನು ಮತ್ತು
ದೃಶ್ಯಗಳನ್ನು ಕಂಡೆ. ಅವುಗಳು ನನ್ನಲ್ಲಿ ಹೆಚ್ಚಿನ
ಭಯವನ್ನುಂಟು ಮಾಡಿದವು. 6ಅದಕ್ಕಾಗಿ ಬಾಬಿ
ಲೋನಿನ ಎಲ್ಲಾ ವಿದ್ವಾಂಸರನ್ನು ಕರೆತರ
ಬೇಕೆಂದು ಆಜ್ಞೆಯನ್ನು ಕೊಟ್ಟೆ, ಅವರು ನನ್ನ ಕನ
ಸಿನ ಅರ್ಥವನ್ನು ತಿಳಿಸಲಿ ಎಂಬುದೇ ನನ್ನ ಉದ್ದೇಶ
ವಾಗಿತ್ತು. 7ಮಂತ್ರವಾದಿಗಳು, ಜೋಯಿಸರು,
ಮತ್ತು ವಿದ್ವಾಂಸರು ಬಂದ ಮೇಲೆ ನಾನು ಅವರಿಗೆ
ನನ್ನ ಕನಸಿನ ಬಗ್ಗೆ ಹೇಳಿದೆ. ಆದರೆ ಅವರಿಗೆ ಅದರ
ಅರ್ಥವನ್ನು ತಿಳಿಸಲಾಗಲಿಲ್ಲ. 8ಕೊನೆಗೆ ದಾನಿ
ಯೇಲನು ಬಂದನು. (ನಾನು ದಾನಿಯೇಲನಿಗೆ
ನನ್ನ ದೇವರ ಸ್ಮರಣಾರ್ಥವಾಗಿ ಬೇಲ್ತೆಶಚ್ಚರನೆಂಬ
ಹೆಸರನ್ನು ಇಟ್ಟಿದ್ದೆ. ಪವಿತ್ರ ದೇವರುಗಳ ಆತ್ಮವು
ಅವನಲ್ಲಿದೆ.) ನಾನು ದಾನಿಯೇಲನಿಗೆ ನನ್ನ
ಕನಸಿನ ಬಗ್ಗೆ ಹೇಳಿದೆ.
9ನಾನು, ‘‘ಬೇಲ್ತೆಶಚ್ಚರನೇ, ಎಲ್ಲಾ ಮಂತ್ರ
ವಾದಿಗಳಿಗಿಂತಲೂ ನೀನು ಬಹಳ ಶ್ರೇಷ್ಠನು.
ಪರಿಶುದ್ಧ ದೇವರುಗಳ ಆತ್ಮವು ನಿನ್ನಲ್ಲಿ ನೆಲೆಸಿದೆ
ಎಂದು ನನಗೆ ಗೊತ್ತಿದೆ. ನಿನಗೆ ತಿಳಿದುಕೊಳ್ಳಲು
ಕಷ್ಟವಾದ ಯಾವ ರಹಸ್ಯವೂ ಇಲ್ಲವೆಂದು ನಾನು
ಬಲ್ಲೆನು. ನಾನು ಕನಸಿನಲ್ಲಿ ಕಂಡದ್ದು ಇಂತಿದೆ.
ಅದರ ಅರ್ಥವನ್ನು ನನಗೆ ಹೇಳು. 10ನಾನು ನನ್ನ
ಹಾಸಿಗೆಯಲ್ಲಿ ಮಲಗಿಕೊಂಡಾಗ ಕಂಡ ದೃಶ್ಯಗಳು
ಇವು: ನನ್ನ ಎದುರಿಗೆ ಭೂಮಿಯ ಮಧ್ಯದಲ್ಲಿ
ಒಂದು ಮರವು ಇದ್ದುದನ್ನು ನಾನು ಕಂಡೆ. ಆ
ಮರವು ಅತಿ ಎತ್ತರವಾಗಿತ್ತು. 11ಆ ಮರವು ಬಹಳ
ದೊಡ್ಡದಾಗಿ ಮತ್ತು ಬಲಯುತವಾಗಿ ಬೆಳೆಯಿತು.
ಆ ಮರದ ತುದಿಯು ಆಕಾಶಕ್ಕೆ ಮುಟ್ಟಿತ್ತು.
ಅದನ್ನು ಭೂಲೋಕದ ಯಾವ ಸ್ಥಳದಿಂದ
ಲಾದರೂ ನೋಡಬಹುದಾಗಿತ್ತು. 12ಆ ಮರದ
ಎಲೆಗಳು ಸುಂದರವಾಗಿದ್ದವು. ಅದು ತುಂಬ
ಒಳ್ಳೆಯ ಹಣ್ಣುಗಳನ್ನು ಫಲಿಸಿತ್ತು. ಆ ಮರದಲ್ಲಿ
ಪ್ರತಿಯೊಬ್ಬರಿಗೂ ಸಾಕಾಗುವಷ್ಟು ಆಹಾರವಿತ್ತು.
ಕಾಡುಪ್ರಾಣಿಗಳೂ ಆ ಮರದ ಕೆಳಗೆ ಆಶ್ರಯ
ವನ್ನು ಪಡೆದಿದ್ದವು. ಅದರ ಕೊಂಬೆಗಳಲ್ಲಿ ಪಕ್ಷಿ
ಗಳು ವಾಸಮಾಡಿಕೊಂಡಿದ್ದವು. ಪ್ರತಿಯೊಂದು
ಪ್ರಾಣಿಗೂ ಆ ಮರದಿಂದ ಆಹಾರ ಸಿಕ್ಕುತ್ತಿತ್ತು.
13ನಾನು ನನ್ನ ಹಾಸಿಗೆಯಲ್ಲಿ ಮಲಗಿಕೊಂಡು
ನನ್ನ ದರ್ಶನದಲ್ಲಿ ಅದೆಲ್ಲವನ್ನು ನೋಡುತ್ತಿದ್ದೆ.
ಆಗ ಪವಿತ್ರ ದೇವದೂತನೊಬ್ಬನು ಆಕಾಶದಿಂದ
ಕೆಳಗಿಳಿದು ಬರುವದನ್ನು ಕಂಡೆ. 14ಅವನು ಮಹಾ
ಧ್ವನಿಯಿಂದ, ‘‘ಮರವನ್ನು ಕಡಿದುಹಾಕಿರಿ; ಅದರ
ಕೊಂಬೆಗಳನ್ನು ಕಡಿದುಹಾಕಿರಿ. ಅದರ ಎಲೆಗ
ಳನ್ನು ಕಿತ್ತುಹಾಕಿರಿ; ಹಣ್ಣುಗಳನ್ನು ಸುತ್ತಲೂ
ಉದುರಿಸಿಬಿಡಿ. ಮರದ ಕೆಳಗೆ ಇದ್ದ ಪ್ರಾಣಿಗಳು
ಓಡಿಹೋಗುವವು. ಅದರ ಕೊಂಬೆಯಲ್ಲಿ ವಾಸ
ವಾಗಿದ್ದ ಪಕ್ಷಿಗಳು ಹಾರಿಹೋಗುವವು. 15ಆದರೆ
ಅದರ ಬೇರುಗಳು ಮತ್ತು ಬುಡದ ಮೋಟು
ಭೂಮಿಯಲ್ಲಿ ಉಳಿಯಲಿ. ಅದರ ಸುತ್ತಲೂ
ಕಬ್ಬಿಣದ ಮತ್ತು ಕಂಚಿನ ಒಂದು ಪಟ್ಟಿಯನ್ನು
ಹಾಕಿರಿ. ಆ ಮೋಟು ಮತ್ತು ಬೇರುಗಳು ಹೊಲ
ದಲ್ಲಿ ಉಳಿಯಲಿ. ಅದರ ಸುತ್ತ ಹುಲ್ಲು ಬೆಳೆದಿರಲಿ.
ಅದು ಅಡವಿಯಲ್ಲಿ ಕಾಡು ಪ್ರಾಣಿಗಳ ಮತ್ತು
ಸಸಿಗಳ ಜೊತೆಯಲ್ಲಿ ಇರಲಿ; ಅದು ಇಬ್ಬನಿಯಿಂದ
ಹಸಿಯಾಗಲಿ. 16ಅದು ಮನುಷ್ಯನಂತೆ ವಿಚಾರ
ಮಾಡುವದನ್ನು ಬಿಟ್ಟು ಪ್ರಾಣಿಯಂತೆ ವಿಚಾರ
ಮಾಡತೊಡಗಲಿ. ಅದು ಈ ಸ್ಥಿತಿಯಲ್ಲಿ ಏಳು
ವರ್ಷವಿರಲಿ’’ ಎಂದು ಹೇಳಿದನು.
17ಈ ಶಿಕ್ಷೆಯನ್ನು ದೇವದೂತನು ಸಾರಿದನು.
ಮಾನವ ಸಾಮ್ರಾಜ್ಯಗಳ ಮೇಲೆ ಮಹೋನ್ನತ
ನಾದ ದೇವರು ಆಳುವನು. ಅವನು ಆ ಸಾಮ್ರಾಜ್ಯ
ಗಳನ್ನು ತನಗೆ ಬೇಕಾದವರಿಗೆ ಒಪ್ಪಿಸುವನು,

ಕನಿಷ್ಠರನ್ನು ನೇಮಿಸುವನು ಎಂಬುದು ಲೋಕದ ಜನರಿಗೆಲ್ಲ ತಿಳಿದುಬರಲಿ ಎಂದೇ ಅವನು ಸಾರಿದನು.

18‘‘ಅರಸನಾದ ನೆಬೂಕದ್ನೆಚ್ಚರನೆಂಬ ನಾನು ಈ ಕನಸನ್ನು ಕಂಡೆನು. ಆಗ ನಾನು, ಬೇಲ್ತೆಶ ಚ್ಚರನೇ (ದಾನಿಯೇಲನೇ), ಇದರ ಅರ್ಥವನ್ನು ನನಗೆ ತಿಳಿಸು. ನನ್ನ ರಾಜ್ಯದಲ್ಲಿರುವ ವಿದ್ವಾಂಸ ರಲ್ಲಿ ಯಾರೂ ಇದರ ಅರ್ಥವನ್ನು ನನಗೆ ಹೇಳ ಲಾರರು. ಆದರೆ ನೀನು ಈ ಕನಸಿನ ಅರ್ಥವನ್ನು ತಿಳಿಸಬಲ್ಲೆ. ಏಕೆಂದರೆ ಪವಿತ್ರ ದೇವರುಗಳ ಆತ್ಮವು ನಿನ್ನಲ್ಲಿ ನೆಲೆಸಿರುವದು ನನಗೆ ತಿಳಿದದೆ’’ ಎಂದೆನು.

19ಆಗ ದಾನಿಯೇಲನು (ಬೇಲ್ತೆಶಚ್ಚರನು) ಸುಮಾರು ಒಂದು ಗಂಟೆಯವರೆಗೆ ಮೌನವಾಗಿದ್ದನು. ಅವನ ಬುದ್ಧಿಗೆ ಹೊಳೆದ ವಿಷಯಗಳು ಅವನನ್ನು ಗಾಬರಿ ಪಡಿಸಿ ದವು. ಆಗ ರಾಜನು, ‘‘ಬೇಲ್ತೆಶಚ್ಚರನೇ (ದಾನಿಯೇ ಲನೇ), ಕನಸು ಅಥವಾ ಕನಸಿನ ಅರ್ಥವು ನಿನ್ನನ್ನು ಭಯ ಗೊಳಿಸದಿರಲಿ’’ ಎಂದು ಧೈರ್ಯ ಹೇಳಿದನು.

ಆಗ ಬೇಲ್ತೆಶಚ್ಚರನು ಅರಸನಿಗೆ ‘‘ನನ್ನ ಒಡೆಯನೇ, ಈ ಕನಸು ನಿನ್ನ ವಿರೋಧಿಗಳಿಗೆ ಫಲಿಸಲಿ. ಇದರ ಅರ್ಥವು ನಿನ್ನ ವಿರೋಧಿಗಳ ಅನುಭವಕ್ಕೆ ಬರಲಿ ಎಂದು ನಾನು
ಹಾರೈಸುತ್ತೇನೆ. 20-21ನೀನು ನಿನ್ನ ಕನಸಿನಲ್ಲಿ ಒಂದು ಮರ
ವನ್ನು ಕಂಡೆ. ಆ ಮರವು ದೊಡ್ಡದಾಗಿ ಮತ್ತು ಬಲಯುತ ವಾಗಿ ಬೆಳೆಯಿತು. ಅದರ ತುದಿ ಆಕಾಶವನ್ನು ಮುಟ್ಟಿತು. ಅದು ಭೂಲೋಕದ ಎಲ್ಲೆಡೆಯಿಂದಲೂ ಕಾಣಿಸುತ್ತಿತ್ತು. ಅದರ ಎಲೆಗಳು ಸುಂದರವಾಗಿದ್ದವು: ಅದು ಸಾಕಷ್ಟು ಹಣ್ಣುಗಳನ್ನು ಫಲಿಸಿತ್ತು. ಆ ಹಣ್ಣುಗಳು ಎಲ್ಲರಿಗೂ ಸಾಕಾ ಗುವಷ್ಟು ಆಹಾರವನ್ನು ಕೊಟ್ಟವು. ಅದು ಕಾಡು ಪ್ರಾಣಿ ಗಳಿಗೆ ವಾಸಸ್ಥಾನವಾಗಿತ್ತು; ಅದರ ಕೊಂಬೆಗಳು ಪಕ್ಷಿಗಳಿಗೆ ಗೂಡುಕಟ್ಟುವ ಸ್ಥಳಗಳಾಗಿದ್ದವು. ಆ ಮರವನ್ನು ನೀನು
ನೋಡಿದೆ. 22ಅರಸನೇ, ನೀನೇ ಆ ಮರ. ನೀನು ಪ್ರಖ್ಯಾ
ತನೂ ಮತ್ತು ಪ್ರಬಲನೂ ಆಗಿರುವೆ. ನೀನು ಗಗನಚುಂಬಿ ಯಾದ ಆ ಮರದಂತೆ ಬೆಳೆದಿರುವೆ. ನಿನ್ನ ಪ್ರಾಬಲ್ಯವು ಈ ಭೂಮಿಯಲ್ಲಿ ದೂರದೂರದವರೆಗೆ ಹಬ್ಬಿದೆ.

23‘‘ರಾಜನೇ, ನೀನು ಆಕಾಶದಿಂದ ಇಳಿದುಬರುತ್ತಿದ್ದ ಒಬ್ಬ ಪರಿಶುದ್ಧ ದೇವದೂತನನ್ನು ಕಂಡೆ. ಅವನು, ‘ಮರ ವನ್ನು ಕಡಿದು ನಾಶಮಾಡಿರಿ. ಅದರ ಬುಡದ ಮೋಟಿನ ಸುತ್ತಲೂ ಕಬ್ಬಿಣದ ಮತ್ತು ಕಂಚಿನ ಒಂದು ಪಟ್ಟಿಯನ್ನು ಹಾಕಿರಿ. ಆ ಬುಡದ ಮೋಟನ್ನು ಮತ್ತು ಬೇರುಗಳನ್ನು ಭೂಮಿಯಲ್ಲಿ ಬಿಟ್ಟುಬಿಡಿ. ಅದರ ಸುತ್ತಲೂ ಕಾಡಿನ ಹುಲ್ಲು ಬೆಳೆಯಲಿ. ಅದು ಇಬ್ಬನಿಯಿಂದ ತೊಯ್ದು ಹೋಗಲಿ. ಅದು ಕಾಡುಪ್ರಾಣಿಯಂತೆ ಇರುವುದು. ಅದು ಏಳು ವರ್ಷ ಕಳೆಯುವವರೆಗೆ ಹಾಗೆಯೇ ಇರುವುದು’’ ಎಂದು ಹೇಳಿದನು.

24‘‘ಕನಸಿನ ಅರ್ಥವು ಹೀಗಿದೆ: ರಾಜನೇ, ಮಹೋನ್ನತ ನಾದ ದೇವರು ನನ್ನ ಒಡೆಯನಾದ ರಾಜನಿಗೆ ಹೀಗಾಗ
ಬೇಕೆಂದು ಆಜ್ಞಾಪಿಸಿದ್ದಾನೆ. 25ರಾಜನಾದ ನೆಬೂಕದ್ನೆಚ್ಚ
ರನೇ, ನಿನ್ನನ್ನು ಬಲವಂತದಿಂದ ಜನರಿಂದ ದೂರಮಾಡು ವರು. ನೀನು ಕಾಡುಪ್ರಾಣಿಗಳೊಂದಿಗೆ ವಾಸಮಾಡುವೆ; ಹಸುಗಳಂತೆ ಹುಲ್ಲು ತಿನ್ನುವೆ; ಇಬ್ಬನಿಯಿಂದ ತೋಯಿಸಿ ಕೊಳ್ಳುವೆ. ಏಳು ವರ್ಷಗಳು ಕಳೆಯುವವು. ಆಗ ನೀನು ಮಹೋನ್ನತನಾದ ದೇವರು ಮಾನವರ ಸಾಮ್ರಾಜ್ಯದ ಮೇಲೆ ಆಳ್ವಿಕೆ ಮಾಡುತ್ತಾನೆ ಮತ್ತು ತನಗೆ ಬೇಕಾದವರಿಗೆ ರಾಜ್ಯಗಳನ್ನು ಕೊಡುತ್ತಾನೆ ಎಂಬ ಪಾಠವನ್ನು ಕಲಿಯುವೆ.

26‘‘ಮರದ ಬುಡದ ಮೋಟನ್ನು ಮತ್ತು ಅದರ ಬೇರು ಗಳನ್ನು ಭೂಮಿಯಲ್ಲಿಯೇ ಬಿಟ್ಟುಬಿಡಿ ಎಂಬುದರ ಅರ್ಥವೇನೆಂದರೆ, ನಿನ್ನ ರಾಜ್ಯವನ್ನು ನಿನಗೆ ಹಿಂತಿರುಗಿಸ ಲಾಗುವುದು. ಮಹೋನ್ನತನಾದ ದೇವರು ನಿನ್ನ ಸಾಮ್ರಾ ಜ್ಯದ ಮೇಲೆ ಆಳ್ವಿಕೆ ಮಾಡುತ್ತಾನೆ ಎಂಬುದನ್ನು ನೀನು
ತಿಳಿದುಕೊಂಡ ಬಳಿಕ ಹೀಗಾಗುವುದು. 27ಆದುದರಿಂದ
ರಾಜನೇ, ನನ್ನ ಬುದ್ಧಿವಾದವನ್ನು ದಯವಿಟ್ಟು ಒಪ್ಪಿಕೊ. ನೀನು ಪಾಪಕಾರ್ಯಗಳನ್ನು ಮಾಡಬೇಡ. ನೀತಿಯನ್ನು ಅನುಸರಿಸು; ಕೆಟ್ಟದ್ದನ್ನು ಮಾಡಬೇಡ. ಬಡಜನರಿಗೆ ಕರುಣೆಯನ್ನು ತೋರು. ಇದರಿಂದ ನಿನ್ನ ನೆಮ್ಮದಿಯ ಕಾಲವು ಹೆಚ್ಚಾಗುವುದು, ಇದೇ ನನ್ನ ಬುದ್ಧಿವಾದ’’ ಎಂದು ಅರಿಕೆ ಮಾಡಿದನು.

28ಇದೆಲ್ಲವೂ ರಾಜನಾದ ನೆಬೂಕದ್ನೆಚ್ಚರನ ಅನುಭ ವಕ್ಕೆ ಬಂತು.

29-30ಕನಸು ಕಂಡ ಹನ್ನೆರಡು ತಿಂಗಳುಗಳಾದ ಮೇಲೆ ರಾಜನಾದ ನೆಬೂಕದ್ನೆಚ್ಚರನು ಬಾಬಿಲೋನಿನಲ್ಲಿದ್ದ ಅರ ಮನೆಯ ಮಾಳಿಗೆಯ ಮೇಲೆ ತಿರುಗಾಡುತ್ತಿದ್ದನು. ಮಾಳಿಗೆಯ ಮೇಲಿದ್ದಾಗ ಅರಸನು, ‘‘ಈ ಬಾಬಿ ಲೋನ್ ನಗರವನ್ನು ನೋಡಿ, ನಾನು ಈ ಮಹಾನಗರ ವನ್ನು ಕಟ್ಟಿದೆ. ಇದು ನನ್ನ ಅರಮನೆ. ನಾನು ನನ್ನ ಸಾಮರ್ಥ್ಯದಿಂದ ಈ ಅರಮನೆಯನ್ನು ಕಟ್ಟಿದೆ. ನಾನು ಎಂಥಾ ದೊಡ್ಡವನು ಎಂದು ಲೋಕಕ್ಕೆ ತೋರಿಸಲು ನಾನು ಈ ಅರಮನೆಯನ್ನು ಕಟ್ಟಿದೆ’’ಎಂದು ತನ್ನಷ್ಟಕ್ಕೆ ತಾನೇ ಹೇಳಿಕೊಳ್ಳುತ್ತಿದ್ದನು.

31ಆ ಶಬ್ದಗಳು ಇನ್ನೂ ಬಾಯಿಯಲ್ಲಿಯೇ ಇದ್ದಾಗ, ಆಕಾಶವಾಣಿಯಾಯಿತು. ಆ ಧ್ವನಿಯು, ‘‘ರಾಜನಾದ ನೆಬೂಕದ್ನೆಚ್ಚರನೇ, ನಿನ್ನಿಂದ ನಿನ್ನ ರಾಜನ ಪದವಿಯನ್ನು
ಕಿತ್ತುಕೊಳ್ಳಲಾಗಿದೆ. 32ಜನರನ್ನು ಬಿಟ್ಟುಹೋಗುವಂತೆ
ನಿನ್ನನ್ನು ಒತ್ತಾಯಿಸಲಾಗುವುದು. ನೀನು ಕಾಡುಪ್ರಾಣಿಗ

ಳೊಂದಿಗೆ ವಾಸಿಸುವೆ. ಹಸುಗಳಂತೆ ಹುಲ್ಲು ತಿನ್ನುವೆ; ನೀನು ಪಾಠ ಕಲಿಯುವದಕ್ಕೆ ಏಳು ವರ್ಷ ಬೇಕಾಗುವುದು. ಆಗ ಮಹೋನ್ನತನಾದ ದೇವರು ಮಾನವನ ಸಾಮ್ರಾಜ್ಯಗಳ ಮೇಲೆ ಆಳ್ವಿಕೆ ಮಾಡುತ್ತಾನೆ ಮತ್ತು ತನಗೆ ಬೇಕಾದವರಿಗೆ ಸಾಮ್ರಾಜ್ಯವನ್ನು ಕೊಡುತ್ತಾನೆ ಎಂಬ ಸತ್ಯವನ್ನು ನೀನು ತಿಳಿದುಕೊಳ್ಳುವೆ'' ಎಂದು ನುಡಿಯಿತು.

33ಆ ಮಾತುಗಳು ತಕ್ಷಣ ನೆರವೇರಿದವು. ನೆಬೂಕದ್ನೆಚ್ಚರನು ಜನರನ್ನು ಬಿಟ್ಟು ಹೋಗಬೇಕಾಯಿತು. ಅವನು ಹಸುಗಳಂತೆ ಹುಲ್ಲು ತಿನ್ನತೊಡಗಿದನು. ಅವನು ಇಬ್ಬನಿಯಿಂದ ನೆನೆದನು. ಅವನ ಕೂದಲುಗಳು ಹದ್ದಿನ ಗರಿಯಂತೆ ಬೆಳೆದವು. ಅವನ ಉಗುರುಗಳು ಪಕ್ಷಿಗಳ ಉಗುರುಗಳಂತೆ ಬೆಳೆದವು.

34ಆ ಕಾಲವು ಕಳೆದ ಮೇಲೆ ನೆಬೂಕದ್ನೆಚ್ಚರನಾದ ನಾನು ಆಕಾಶದ ಕಡೆಗೆ ನೋಡಿದೆ. ಆಗ ನಾನು ಸ್ವಸ್ಥ ಬುದ್ಧಿಯುಳ್ಳವನಾಗಿದ್ದೆ. ಬಳಿಕ ನಾನು ಮಹೋನ್ನತನಾದ ದೇವರನ್ನು ಸ್ತುತಿಸಿದೆ. ನಿತ್ಯನಾದ ಆ ದೇವರನ್ನು ಕೊಂಡಾಡಿದೆ. ಸ್ತೋತ್ರಮಾಡಿದೆ.

ದೇವರ ಆಳ್ವಿಕೆಯು ಶಾಶ್ವತ! ಆತನ ಸಾಮ್ರಾಜ್ಯವು ಎಲ್ಲಾ ತಲೆಮಾರುಗಳಲ್ಲಿಯೂ ಇರುವುದು.

35 ಭೂಮಿಯ ಜನರು ಬಹು ಮುಖ್ಯರಲ್ಲ. ದೇವರು ಪರಲೋಕ ಸಮೂಹದವರಿಗೂ ಭೂಲೋಕದ ನಿವಾಸಿಗಳಿಗೂ ತನ್ನ ಚಿತ್ತಾನುಸಾರ ಮಾಡುತ್ತಾನೆ. ಯಾರೂ ಆತನನ್ನು ತಡೆಯಲಾರರು! ಯಾರೂ ಆತನನ್ನು ಪ್ರಶ್ನಿಸಲಾರರು!

36ಆಗ ದೇವರು ನನಗೆ ಸರಿಯಾದ ಬುದ್ಧಿಯನ್ನು ಕೊಟ್ಟನು. ನನಗೆ ರಾಜನ ಗೌರವ, ಪ್ರಭಾವ ವೈಭವಗಳು ಮತ್ತೆ ಲಭಿಸಿದವು. ನನ್ನ ಮಂತ್ರಿಗಳೂ ಅಧಿಪತಿಗಳೂ ನನ್ನನ್ನು ಸ್ವೀಕರಿಸಿದರು. ನಾನು ಮತ್ತೆ ಅರಸನಾದೆನು. ನಾನು ಮೊದಲಿಗಿಂತಲೂ ಅಧಿಕ ಶಕ್ತಿಶಾಲಿಯಾದ ಮತ್ತು ಪ್ರಭಾವಶಾಲಿಯಾದ ಅರಸನಾದೆನು.

37ಅರಸ ನೆಬೂಕದ್ನೆಚ್ಚರನಾದ ನಾನು ಈಗ ಪರಲೋಕದ ರಾಜನನ್ನು ಘನಪಡಿಸುತ್ತೇನೆ, ಮಹಿಮೆ ಪಡಿಸುತ್ತೇನೆ. ಆತನು ಮಾಡುವದೆಲ್ಲ ಸರಿ. ಆತನು ಯಾವಾಗಲೂ ನ್ಯಾಯವಂತನಾಗಿದ್ದಾನೆ. ಆತನು ಗರ್ವಿಷ್ಠರನ್ನು ದೀನರನ್ನಾಗಿ ಮಾಡಬಲ್ಲನು.

## ಗೋಡೆಯ ಮೇಲೆ ಅದ್ಭುತ ಲೇಖನ

5 ರಾಜನಾದ ಬೇಲ್ಶಚ್ಚರನು ತನ್ನ ಒಂದು ಸಾವಿರ ಜನ
ಅಧಿಕಾರಿಗಳಿಗೆ ಒಂದು ಔತಣವನ್ನು ಕೊಟ್ಟನು.
ರಾಜನು ಅವರ ಜೊತೆ ದ್ರಾಕ್ಷಾರಸವನ್ನು ಪಾನ ಮಾಡು
ತ್ತಿದ್ದನು. 2ಬೇಲ್ಶಚ್ಚರನು ದ್ರಾಕ್ಷಾರಸ ಪಾನ ಮಾಡು
ವಾಗ, ತನ್ನ ತಂದೆಯಾದ ನೆಬೂಕದ್ನೆಚ್ಚರನು ಜೆರುಸ
ಲೇಮಿನ ಆಲಯದಿಂದ ಎತ್ತಿಕೊಂಡು ಬಂದಿದ್ದ ಬೆಳ್ಳಿ
ಬಂಗಾರಗಳ ಲೋಟಗಳನ್ನು ತೆಗೆದುಕೊಂಡು ಬರ
ಬೇಕೆಂದು ತನ್ನ ಸೇವಕರಿಗೆ ಆಜ್ಞಾಪಿಸಿದನು. ತನ್ನ
ಮುಖಂಡರು, ಪತ್ನಿಯರು ಮತ್ತು ಉಪಪತ್ನಿಯರು ಆ
ಪಾತ್ರೆಗಳಲ್ಲಿ ದ್ರಾಕ್ಷಾರಸ ಪಾನ ಮಾಡಬೇಕೆಂದು ರಾಜ
ನಾದ ಬೇಲ್ಶಚ್ಚರನ ಅಪೇಕ್ಷೆಯಾಗಿತ್ತು. 3ಆದುದರಿಂದ
ಅವರು ಜೆರುಸಲೇಮಿನ ಆಲಯದಿಂದ ತಂದಿದ್ದ ಆ
ಪಾತ್ರೆಗಳನ್ನು ತಂದರು. ರಾಜನು, ಅವನ ಅಧಿಕಾರಿಗಳು,
ಅವನ ಪತ್ನಿಯರು, ಅವನ ಉಪಪತ್ನಿಯರು ಅವುಗಳಲ್ಲಿ
ದ್ರಾಕ್ಷಾರಸವನ್ನು ಕುಡಿದರು. 4ಅವರು ಕುಡಿಯುವಾಗ
ತಮ್ಮ ಬಂಗಾರ, ಬೆಳ್ಳಿ, ಕಂಚು,ಕಬ್ಬಿಣ, ಮರ ಮತ್ತು
ಕಲ್ಲಿನ ದೇವರುಗಳನ್ನು ಸ್ತುತಿಸುತ್ತಿದ್ದರು.
5ಆಗ ಫಕ್ಕನೆ ಮನುಷ್ಯನ ಕೈಯೊಂದು ಕಾಣಿಸಿಕೊಂಡು
ಗೋಡೆಯ ಮೇಲೆ ಬರೆಯುವದಕ್ಕೆ ಪ್ರಾರಂಭಿಸಿತು.
ಬೆರಳುಗಳು ಗೋಡೆಯ ಸುಣ್ಣದ ಮೇಲೆ ಅಕ್ಷರಗಳನ್ನು
ಕೊರೆದವು. ಆ ಕೈಯು ದೀಪಸ್ತಂಭದ ಹತ್ತಿರ ಅರಮನೆಯ
ಗೋಡೆಯ ಮೇಲೆ ಅರಸನ ಕಣ್ಣೆದುರಿನಲ್ಲಿಯೇ
ಬರೆಯಿತು.
6ರಾಜನಾದ ಬೇಲ್ಶಚ್ಚರನು ಬಹಳ ಹೆದರಿದನು. ಭಯ
ದಿಂದ ಅವನ ಮುಖವು ಕಳೆಗುಂದಿತು; ಮತ್ತು ಅವನ
ಮೊಣಕಾಲುಗಳು ನಡುಗಿ ಒಂದಕ್ಕೊಂದು ಬಡಿಯುತ್ತಿ
ದ್ದವು. ಅವನ ಕಾಲುಗಳು ತುಂಬ ಬಲಹೀನವಾಗಿ ಅವನಿಗೆ
ನಿಲ್ಲಲಾಗಲಿಲ್ಲ. 7ಆಗ ರಾಜನು ಮಂತ್ರವಾದಿ, ಪಂಡಿತ,
ಶಾಕುನಿಕರನ್ನು ತನ್ನಲ್ಲಿಗೆ ಕರೆಸಿದನು. ಅವನು ಆ
ವಿದ್ವಾಂಸರಿಗೆ, ''ಈ ಬರವಣಿಗೆಯನ್ನು ಓದಿ ನನಗೆ ಅದರ
ಅರ್ಥವನ್ನು ಹೇಳಬಲ್ಲ ಮನುಷ್ಯನಿಗೆ ನಾನು ಬಹುಮಾನ
ವನ್ನು ಕೊಡುತ್ತೇನೆ. ಆ ಮನುಷ್ಯನಿಗೆ ನಾನು ಕಂದು
ಬಣ್ಣದ ವಸ್ತ್ರಗಳನ್ನು ಕೊಡುತ್ತೇನೆ. ಅವನ ಕೊರಳಿಗೆ
ಚಿನ್ನದ ಹಾರವನ್ನು ಹಾಕಿಸಿ ಅವನನ್ನು ರಾಜ್ಯದ ಮೂವರು
ಮುಖ್ಯಾಧಿಕಾರಿಗಳಲ್ಲಿ ಒಬ್ಬನನ್ನಾಗಿ ನೇಮಿಸುವೆನು''
ಎಂದು ಹೇಳಿದನು.
8ಆಸ್ಥಾನದ ವಿದ್ವಾಂಸರೆಲ್ಲರೂ ಬಂದು ನೋಡಿದರು.
ಆದರೆ ಆ ಬರಹವನ್ನು ಓದುವುದಕ್ಕಾಗಲೀ ಅದರ ಅರ್ಥ
ವನ್ನು ತಿಳಿದುಕೊಳ್ಳುವುದಕ್ಕಾಗಲೀ ಅವರಿಗೆ ಆಗಲಿಲ್ಲ.
9ಆಗ ಅರಸನಾದ ಬೇಲ್ಶಚ್ಚರನ ಅಧಿಕಾರಿಗಳಿಗೆ ಏನೂ
ತೋಚದಂತಾಯಿತು. ಅರಸನು ಮತ್ತಷ್ಟು ಅಂಜಿದನು

ಮತ್ತು ಕಳವಳಪಟ್ಟನು. ಅವನ ಮುಖವು ಭಯದಿಂದ
ಕಳೆಗುಂದಿತು.
10ಆಗ ರಾಜನ ತಾಯಿಯು ಆ ಔತಣ ಶಾಲೆಗೆ
ಬಂದಳು. ರಾಜನು ಮತ್ತು ಅವನ ಅಧಿಕಾರಿಗಳು ಆಡು
ತ್ತಿದ್ದ ಮಾತುಗಳನ್ನು ಕೇಳಿ ಅವಳು, ‘‘ರಾಜನೇ, ಚಿರಂ
ಜೀವಿಯಾಗಿರು, ಭಯಪಡಬೇಡ. ಭಯದಿಂದ ನಿನ್ನ
ಮುಖ ಅಷ್ಟೊಂದು ಬಿಳುಚಿಕೊಳ್ಳಲು ಬಿಡಬೇಡ.
11ಪವಿತ್ರ ದೇವರುಗಳ ಆತ್ಮವು ನೆಲೆಸಿರುವ ಒಬ್ಬನು ನಿನ್ನ
ರಾಜ್ಯದಲ್ಲಿ ಇದ್ದಾನೆ. ದೇವರ ಜ್ಞಾನಕ್ಕೆ ಸಮಾನವಾದ
ಜ್ಞಾನವೂ ಬುದ್ಧಿಯೂ ರಹಸ್ಯವನ್ನು ತಿಳಿದುಕೊಳ್ಳುವ
ಶಕ್ತಿಯೂ ತನಗಿರುವುದಾಗಿ ಅವನು ನಿನ್ನ ತಂದೆಯ
ಕಾಲದಲ್ಲಿಯೇ ತೋರಿಸಿಕೊಟ್ಟಿದ್ದಾನೆ. ನಿನ್ನ ತಂದೆ
ಯಾದ ನೆಬೂಕದ್ನೆಚ್ಚರನು ಈ ಮನುಷ್ಯನನ್ನು ಎಲ್ಲ
ವಿದ್ವಾಂಸರ ಅಧ್ಯಕ್ಷನನ್ನಾಗಿ ನೇಮಿಸಿದ್ದನು. ಎಲ್ಲ
ಜೋಯಿಸರಿಗೆ, ಮಂತ್ರವಾದಿಗಳಿಗೆ, ಶಾಕುನಿಕರಿಗೆ
ಮತ್ತು ಪಂಡಿತರಿಗೆ ಇವನು ಮುಖ್ಯಸ್ಥನಾಗಿದ್ದನು.
12ನಾನು ಹೇಳುತ್ತಿರುವ ಮನುಷ್ಯನ ಹೆಸರು ದಾನಿ
ಯೇಲ್. ರಾಜನು ಅವನಿಗೆ ಬೇಲ್ತೆಶಚ್ಚರನೆಂದು ಹೆಸರಿ
ಟ್ಟಿದ್ದನು. ಬೇಲ್ತೆಶಚ್ಚರನು ಬಹಳ ಚಾಣಾಕ್ಷ ಮತ್ತು
ಅನೇಕ ವಿಷಯಗಳನ್ನು ಬಲ್ಲವನು, ಅವನು ಕನಸುಗಳ
ಅರ್ಥವನ್ನು ಹೇಳಬಲ್ಲನು, ರಹಸ್ಯಗಳನ್ನು ವಿವರಿಸ
ಬಲ್ಲನು; ಕಠಿಣವಾದ ಎಲ್ಲ ಸಮಸ್ಯೆಗಳನ್ನು ಪರಿಹರಿಸ
ಬಲ್ಲನು. ದಾನಿಯೇಲನನ್ನು ಕರೆಯಿಸು. ಅವನು
ಗೋಡೆಯ ಮೇಲಿನ ಬರಹದ ಅರ್ಥವನ್ನು ನಿನಗೆ
ಹೇಳುತ್ತಾನೆ’’ ಎಂದು ಹೇಳಿದಳು.
13ದಾನಿಯೇಲನನ್ನು ಅರಸನಲ್ಲಿಗೆ ಕರೆದು ತರ
ಲಾಯಿತು. ಆಗ ರಾಜನು, ‘‘ರಾಜನಾಗಿದ್ದ ನನ್ನ
ತಂದೆಯು ಯೆಹೂದದಿಂದ ಸೆರೆಹಿಡಿದು ತಂದವರಲ್ಲಿ
ಒಬ್ಬನಾದ ದಾನಿಯೇಲನು ನೀನೋ? 14ದೇವರುಗಳ
ಆತ್ಮವು ನಿನ್ನಲ್ಲಿದೆ ಎಂದು ನಾನು ಕೇಳಿದ್ದೇನೆ. ನೀನು
ರಹಸ್ಯವನ್ನು ತಿಳಿದುಕೊಳ್ಳಬಲ್ಲವನು, ಬಹಳ ಚಾಣಾ
ಕ್ಷನು ಮತ್ತು ಬುದ್ಧಿವಂತನೆಂದು ನಾನು ಕೇಳಿದ್ದೇನೆ.
15ಗೋಡೆಯ ಮೇಲಿನ ಈ ಬರಹವನ್ನು ಓದಲು ಮಂತ್ರ
ವಾದಿಗಳನ್ನು, ವಿದ್ವಾಂಸರನ್ನು ಕರೆಸಲಾಯಿತು. ಅವರು
ಆ ಬರಹದ ಅರ್ಥವನ್ನು ನನಗೆ ವಿವರಿಸಬೇಕೆಂದು ನನ್ನ
ಉದ್ದೇಶವಾಗಿತ್ತು. ಆದರೆ ಗೋಡೆಯ ಮೇಲಿನ ಈ
ಬರಹದ ಅರ್ಥವನ್ನು ಅವರು ನನಗೆ ಹೇಳಲು ಸಾಧ್ಯ
ವಾಗಲಿಲ್ಲ. 16ನಾನು ನಿನ್ನ ಬಗ್ಗೆ ಕೇಳಿದ್ದೇನೆ. ನೀನು
ಗೂಡಾರ್ಥವನ್ನು ತಿಳಿದುಕೊಳ್ಳಬಲ್ಲೆ ಮತ್ತು ಕಠಿಣವಾದ
ಸಮಸ್ಯೆಗಳಿಗೆ ಪರಿಹಾರ ಹೇಳಬಲ್ಲೆ ಎಂದು ನಾನು
ಕೇಳಿದ್ದೇನೆ. ನೀನು ಗೋಡೆಯ ಮೇಲಿನ ಈ ಬರಹವನ್ನು
ಓದಿ ಅದರ ಅರ್ಥವನ್ನು ನನಗೆ ವಿವರಿಸಿದರೆ, ನಾನು ನಿನಗೆ
ಕಂದುಬಣ್ಣದ ಬಟ್ಟೆಗಳನ್ನು ಕೊಡುತ್ತೇನೆ. ನಿನ್ನ ಕತ್ತಿಗೆ
ಚಿನ್ನದ ಹಾರವನ್ನು ಹಾಕುತ್ತೇನೆ; ನಿನ್ನನ್ನು ನನ್ನ ರಾಜ್ಯದ
ಮೂವರು ಮುಖ್ಯಾಧಿಕಾರಿಗಳಲ್ಲಿ ಒಬ್ಬನನ್ನಾಗಿ ನೇಮಿ
ಸುತ್ತೇನೆ’’ ಎಂದು ಹೇಳಿದನು.
17ಆಗ ದಾನಿಯೇಲನು ರಾಜನಿಗೆ, ‘‘ರಾಜನಾದ
ಬೇಲ್ಶಚ್ಚರನೇ, ನಿನ್ನ ಕಾಣಿಕೆಗಳು ನಿನ್ನಲ್ಲಿಯೇ ಇರಲಿ
ಅಥವಾ ಆ ಬಹುಮಾನಗಳನ್ನು ಬೇರೆ ಯಾರಿಗಾದರೂ
ಕೊಡು. ಆದರೂ ಗೋಡೆಯ ಮೇಲಿನ ಬರಹವನ್ನು ಓದಿ
ಅದರ ಅರ್ಥವನ್ನು ನಿನಗೆ ವಿವರಿಸುತ್ತೇನೆ’’ಎಂದು
ಉತ್ತರಿಸಿದನು.
18‘‘ರಾಜನೇ, ಮಹೋನ್ನತನಾದ ದೇವರು ನಿನ್ನ ತಂದೆ
ಯಾದ ನೆಬೂಕದ್ನೆಚ್ಚರನನ್ನು ಮಹಾ ದೊಡ್ಡ ರಾಜನ
ನ್ನಾಗಿಯೂ, ಬಲಿಷ್ಠನಾದ ರಾಜನನ್ನಾಗಿಯೂ ಪ್ರಮುಖ
ನಾದ ರಾಜನನ್ನಾಗಿಯೂ ಮಾಡಿದ್ದನು. 19ಹಲವಾರು
ಜನಾಂಗದ ಮತ್ತು ಭಾಷೆಯ ಜನರು ಅವನಿಗೆ ತುಂಬ
ಹೆದರುತ್ತಿದ್ದರು. ಏಕೆಂದರೆ ಮಹೋನ್ನತನಾದ ದೇವರು
ಅವನನ್ನು ಬಹುದೊಡ್ಡ ರಾಜನನ್ನಾಗಿ ಮಾಡಿದ್ದನು.
ನೆಬೂಕದ್ನೆಚ್ಚರನು ಯಾರನ್ನಾದರೂ ಕೊಲ್ಲಬೇಕೆಂದು
ಇಚ್ಛೆಸಿದರೆ ಅವನನ್ನು ಕೊಲ್ಲಿಸಿಬಿಡುತ್ತಿದ್ದನು; ತನಗೆ
ಬೇಕಾದವರನ್ನು ಉಳಿಸುತ್ತಿದ್ದನು; ತನ್ನ ಮನಸ್ಸಿಗೆ ಬಂದ
ವರನ್ನು ಏರಿಸುತ್ತಿದ್ದನು; ತನ್ನ ಮನಸ್ಸಿಗೆ ಬಂದವರನ್ನು
ಇಳಿಸುತ್ತಿದ್ದನು.
20‘‘ಆದರೆ ನೆಬೂಕದ್ನೆಚ್ಚರನು ಬಹಳ ಅಹಂಕಾರಿ
ಯಾಗಿದ್ದನು ಮತ್ತು ಹಟಮಾರಿಯಾಗಿದ್ದನು. ಆದುದ
ರಿಂದ ಅವನ ಅಧಿಕಾರವನ್ನು ಕಸಿದುಕೊಳ್ಳಲಾಯಿತು.
ರಾಜಸಿಂಹಾಸನದಿಂದ ಇಳಿಸಿ ಅವನ ಎಲ್ಲ ಘನತೆ
ಗೌರವಗಳನ್ನು ಕಿತ್ತುಕೊಳ್ಳಲಾಯಿತು. 21ಅನಂತರ
ನೆಬೂಕದ್ನೆಚ್ಚರನನ್ನು ಜನರ ಮಧ್ಯದಿಂದ ಓಡಿಸ
ಲಾಯಿತು. ಅವನ ಬುದ್ಧಿಯು ಮೃಗ ಬುದ್ಧಿಯಂತಾ
ಯಿತು. ಅವನು ಕಾಡು ಕತ್ತೆಗಳ ಜೊತೆ ವಾಸಿಸಿದನು;
ಹಸುಗಳಂತೆ ಹುಲ್ಲುತಿಂದನು; ಮಂಜಿನಲ್ಲಿ ನೆನೆದನು.
ಅವನಿಗೆ ಸರಿಯಾದ ಬುದ್ಧಿ ಬರುವತನಕ ಅವನು ಆ ಸ್ಥಿತಿ
ಯಲ್ಲಿದ್ದನು. ಆಗ ಅವನು ಮಹೋನ್ನತನಾದ ದೇವರೇ
ಮಾನವರ ಸಾಮ್ರಾಜ್ಯವನ್ನು ಆಳುತ್ತಾನೆ ಮತ್ತು ಆ
ಸಾಮ್ರಾಜ್ಯಕ್ಕೆ ತನಗೆ ಬೇಕಾದವರನ್ನು ಅರಸರನ್ನಾಗಿ
ನೇಮಿಸುತ್ತಾನೆ ಎಂಬುದನ್ನು ತಿಳಿದುಕೊಂಡನು.
22‘‘ಬೇಲ್ಶಚ್ಚರನೇ, ಇವುಗಳೆಲ್ಲ ನಿನಗೆ ತಿಳಿದೇ ಇವೆ.
ನೀನು ನೆಬೂಕದ್ನೆಚ್ಚರನ ಮಗ. ಆದರೂ ನೀನು ನಮ್ರತೆ
ಯಿಂದ ವರ್ತಿಸಲಿಲ್ಲ. 23ಇಲ್ಲ, ನೀನು ನಮ್ರನಾಗಿರಲಿಲ್ಲ.
ಅದಕ್ಕೆ ಪ್ರತಿಯಾಗಿ ನೀನು ಪರಲೋಕದೊಡೆಯನಿಗೆ
ವಿರುದ್ಧವಾಗಿ ನಡೆದುಕೊಂಡೆ. ಯೆಹೋವನ ಆಲಯ
ದಿಂದ ಕುಡಿಯುವ ಪಾತ್ರೆಗಳನ್ನು ತರಬೇಕೆಂದು

ಆಜ್ಞಾಪಿಸಿದೆ. ನೀನು ಮತ್ತು ನಿನ್ನ ಅಧಿಕಾರಿಗಳು, ನಿನ್ನ ಪತ್ನಿಯರು ಮತ್ತು ನಿನ್ನ ಉಪಪತ್ನಿಯರು ಆ ಪಾತ್ರೆಗಳಲ್ಲಿ ದ್ರಾಕ್ಷಾರಸವನ್ನು ಕುಡಿದಿರಿ. ನೀನು ಬೆಳ್ಳಿ, ಬಂಗಾರ, ಕಂಚು, ಕಬ್ಬಿಣ, ಮರ ಮತ್ತು ಕಲ್ಲಿನ ದೇವರುಗಳನ್ನು ಸ್ತುತಿಸಿದೆ. ಅವುಗಳಿಗೆ ನೋಡುವ, ಕೇಳಿಸಿಕೊಳ್ಳುವ ಅಥವಾ ಸ್ತೋತ್ರವನ್ನು ತಿಳಿದುಕೊಳ್ಳುವ ಸಾಮರ್ಥ್ಯವಿಲ್ಲ. ಆದರೆ ನಿನ್ನ ಜೀವದ ಮೇಲೆಯೂ ನಿನ್ನ ಆಗುಹೋಗುಗಳ ಮೇಲೆಯೂ ಅಧಿಕಾರವುಳ್ಳ ದೇವರನ್ನು ನೀನು ಸ್ತುತಿಸಲಿಲ್ಲ.
24ಆದ್ದರಿಂದ ದೇವರು ಗೋಡೆಯ ಮೇಲೆ ಬರೆಯಲು ಆ ಕೈಯನ್ನು ಕಳುಹಿಸಿಕೊಟ್ಟನು.
25ಆ ಗೋಡೆಯ ಮೇಲೆ ಬರೆದ ಶಬ್ದಗಳು ಹೀಗಿವೆ:

**ಮೆನೇ, ಮೆನೇ, ತೆಕೇಲ್ ಉಪರ್ಸಿನ್.**

26 ‘‘ಈ ಶಬ್ದಗಳ ಅರ್ಥಹೀಗಿದೆ: ಮೆನೇ ಎಂದರೆ ದೇವರು ನಿನ್ನ ಆಳ್ವಿಕೆಯ ಕಾಲವನ್ನು ಲೆಕ್ಕಿಸಿ ಕೊನೆ ಗಾಣಿಸಿದ್ದಾನೆ.
27 ತೆಕೇಲ್ ಎಂದರೆ ನೀನು ತಕ್ಕಡಿಯಲ್ಲಿ ತೂಗಲ್ಪಟ್ಟು ಕಡಿಮೆಯಾಗಿ ಕಂಡುಬಂದಿರುವೆ.
28 ಉಪರ್ಸಿನ್ ಎಂದರೆ ನಿನ್ನ ರಾಜ್ಯವನ್ನು ನಿನ್ನಿಂದ ತೆಗೆದುಕೊಂಡು ವಿಭಜಿಸಲಾಗಿದೆ. ಅದನ್ನು ಮೇದ್ಯಯರಿಗೂ ಪಾರಸಿಯರಿಗೂ ಕೊಡಲಾಗು ವುದು’’ ಎಂದು ವಿವರಿಸಿದನು.

29ದಾನಿಯೇಲನಿಗೆ ಬೇಲ್ಶಚ್ಚರನ ಆಜ್ಞೆಯಂತೆ ಕಂದು ಬಣ್ಣದ ವಸ್ತ್ರಗಳನ್ನು ಕೊಡಲಾಯಿತು. ಚಿನ್ನದ ಸರವನ್ನು ಅವನ ಕೊರಳಿಗೆ ಹಾಕಲಾಯಿತು; ಅವನು ರಾಜ್ಯದ ಮೂವರು ಮುಖ್ಯಾಧಿಕಾರಿಗಳಲ್ಲಿ ಒಬ್ಬನಾದನು.
30ಅದೇ ರಾತ್ರಿ ಕಸ್ದೀಯರ ರಾಜನಾದ ಬೇಲ್ಶಚ್ಚರನ ಕೊಲೆಯಾಯಿತು.
31ಮೇದ್ಯಯನಾದ ದಾರ್ಯಾವೆ ಷನು ಹೊಸ ಅರಸನಾದನು. ಅವನು ಸುಮಾರು ಅರವ ತ್ತೆರಡು ವರ್ಷದವನಾಗಿದ್ದನು.

## ದಾನಿಯೇಲನು ಮತ್ತು ಸಿಂಹಗಳು

6 ದಾರ್ಯಾವೆಷನು ತನ್ನ ರಾಜ್ಯಭಾರವನ್ನು ನಿರ್ವಹಿ ಸುವದಕ್ಕೋಸ್ಕರ ರಾಜ್ಯದ ಆಯಾ ಭಾಗಗಳ ಮೇಲೆ ನೂರಿಪ್ಪತ್ತು ಜನ ದೇಶಾಧಿಪತಿಗಳನ್ನು ನೇಮಿಸಿದನು.
2ಆ ನೂರಿಪ್ಪತ್ತು ಜನರ ಮೇಲೆ ಮೂರು ಜನ ಮುಖ್ಯಾಧಿ ಕಾರಿಗಳನ್ನು ನೇಮಿಸಿದನು. ದಾನಿಯೇಲನು ಈ ಮೂರು ಜನ ಮುಖ್ಯಾಧಿಕಾರಿಗಳಲ್ಲೊಬ್ಬನಾಗಿದ್ದನು. ಯಾರೊ ಬ್ಬರೂ ತನಗೆ ಮೋಸ ಮಾಡದಂತೆ ಮತ್ತು ತನ್ನ ರಾಜ್ಯಕ್ಕೆ ನಷ್ಟವಾಗದಂತೆ ನೋಡಿಕೊಳ್ಳಲು ರಾಜನು ಈ ಮೂವರನ್ನು ನೇಮಿಸಿದ್ದನು.
3ದಾನಿಯೇಲನು ಬೇರೆ ಮುಖ್ಯಾಧಿಕಾರಿಗಳಿಗಿಂತ ಸಮರ್ಥನೆಂದು ತೋರಿಸಿ ಕೊಟ್ಟನು. ದಾನಿಯೇಲನು ತನ್ನ ಒಳ್ಳೆಯ ಗುಣ ಮತ್ತು ಮಹಾ ಸಾಮರ್ಥ್ಯಗಳ ಮೂಲಕ ಈ ಒಳ್ಳೆಯ ಹೆಸರನ್ನು ಪಡೆದನು. ದಾನಿಯೇಲನಿಂದ ಅರಸನು ತುಂಬ ಪ್ರಭಾವಿ ತನಾಗಿ ಅವನನ್ನು ಇಡೀ ರಾಜ್ಯದ ಅಧಿಕಾರಿಯನ್ನಾಗಿ ನೇಮಿಸಲು ಯೋಜನೆ ಮಾಡಿದನು.
4ಆದರೆ ಬೇರೆ ಮುಖ್ಯಾಧಿಕಾರಿಗಳು ಮತ್ತು ದೇಶಾಧಿಪತಿಗಳು ಈ ಸಮಾಚಾರವನ್ನು ತಿಳಿದು ಹೊಟ್ಟೆಕಿಚ್ಚುಪಟ್ಟರು. ಅವರು ದಾನಿಯೇಲನ ಮೇಲೆ ದೋಷಾರೋಪಣೆ ಮಾಡಲು ಕಾರಣಗಳನ್ನು ಹುಡುಕಲಾರಂಭಿಸಿದರು. ದಾನಿಯೇ ಲನು ಮಾಡುವ ರಾಜ್ಯದ ಎಲ್ಲ ಕೆಲಸಗಳ ಮೇಲೆ ಅವರು ಕಣ್ಣಿಟ್ಟರು. ಆದರೆ ದಾನಿಯೇಲನಲ್ಲಿ ಯಾವ ತಪ್ಪೂ ಅವರಿಗೆ ಸಿಕ್ಕಲಿಲ್ಲ. ಆದುದರಿಂದ ಅವರು ಅವನ ಮೇಲೆ ಯಾವ ದೋಷಾರೋಪಣೆಯನ್ನೂ ಮಾಡಲಾಗಲಿಲ್ಲ. ದಾನಿಯೇಲನು ಪ್ರಾಮಾಣಿಕನೂ ವಿಶ್ವಾಸಪಾತ್ರನೂ ಆಗಿದ್ದನು. ಅವನು ಬಹಳ ಕಷ್ಟಪಟ್ಟು ಕೆಲಸ ಮಾಡುತ್ತಿ ದ್ದನು; ಅರಸನಿಗೆ ಯಾವ ರೀತಿಯಲ್ಲೂ ವಂಚನೆ ಮಾಡುತ್ತಿರಲಿಲ್ಲ.
5ಕೊನೆಗೆ ಅವರು, ‘‘ದಾನಿಯೇಲನ ಮೇಲೆ ದೋಷಾ ರೋಪಣೆ ಮಾಡುವದಕ್ಕೆ ನಮಗೆ ಕಾರಣ ಸಿಕ್ಕುವುದೇ ಇಲ್ಲ. ಅವನ ದೇವರ ಧರ್ಮಕ್ಕೆ ಸಂಬಂಧಪಟ್ಟ ವಿಷಯ ಗಳಲ್ಲಿಯೇ ಏನಾದರೂ ತಪ್ಪು ಹುಡುಕಬೇಕು ’’ ಎಂದು ಮಾತನಾಡಿಕೊಂಡರು.
6ಆ ಇಬ್ಬರು ಮುಖ್ಯಾಧಿಕಾರಿಗಳು ಮತ್ತು ದೇಶಾಧಿ ಪತಿಗಳು ಒಟ್ಟಿಗೆ ಸೇರಿ ಅರಸನ ಬಳಿಗೆ ಹೋದರು. ಅವರು, ‘‘ಅರಸನಾದ ದಾರ್ಯಾವೆಷನೇ, ಚಿರಂಜೀವಿ ಯಾಗಿರು.
7ರಾಜ್ಯದ ಸಕಲ ಮುಖ್ಯಾಧಿಕಾರಿಗಳು, ನಾಯಕರು, ದೇಶಾಧಿಪತಿಗಳು, ಮಂತ್ರಿಗಳು ಮತ್ತು ಸಂಸ್ಥಾನಾಧ್ಯಕ್ಷರು ಸೇರಿ ಒಂದು ಆಲೋಚನೆಯನ್ನು ಮಾಡಿದ್ದಾರೆ. ಈ ಸಂಬಂಧವಾಗಿ ಅರಸನು ಒಂದು ನಿಬಂಧನೆಯನ್ನು ಮಾಡಿ ರಾಜಾಜ್ಞೆಯನ್ನು ಹೊರಡಿಸ ಬೇಕೆಂದು ನಮ್ಮೆಲ್ಲರ ಅನಿಸಿಕೆ. ಎಲ್ಲರೂ ಆ ರಾಜಾಜ್ಞೆ ಯನ್ನು ಪಾಲಿಸಬೇಕು. ಆ ನಿಬಂಧನೆ ಹೀಗಿದೆ: ಬರಲಿ ರುವ ಮೂವತ್ತು ದಿನ ಯಾರೂ ಅರಸನಾದ ನಿನ್ನನ್ನು ಬಿಟ್ಟು ಬೇರೆ ಯಾವ ದೇವರನ್ನಾಗಲೀ ಮನುಷ್ಯನ ನ್ನಾಗಲೀ ಪ್ರಾರ್ಥಿಸಕೂಡದು. ಯಾರಾದರೂ ಹಾಗೆ ಮಾಡಿದರೆ ಅವರನ್ನು ಸಿಂಹಗಳ ಗುಹೆಯಲ್ಲಿ ಎಸೆಯ ಲಾಗುವುದು.
8ಅರಸನೇ, ಈ ನಿಬಂಧನೆಯನ್ನು ಬರೆದ ಕಾಗದಕ್ಕೆ ನಿನ್ನ ಹಸ್ತಾಕ್ಷರ ಹಾಕಿ ಅದನ್ನು ಶಾಸನವನ್ನಾಗಿ ಮಾಡು. ಹೀಗೆ ಮಾಡಿದರೆ ಶಾಸನವನ್ನು ಬದಲಾಯಿಸ ಲಾಗುವುದಿಲ್ಲ. ಏಕೆಂದರೆ ಮೇದ್ಯಯರ ಮತ್ತು

ಪಾರಸಿಯರ ಶಾಸನಗಳು ಎಂದಿಗೂ ರದ್ದಾಗುವದಿಲ್ಲ
ಮತ್ತು ಅವುಗಳನ್ನು ಬದಲಾಯಿಸಲಾಗುವುದಿಲ್ಲ.''
9ರಾಜನಾದ ದಾರ್ಯಾವೆಷನು ಆ ನಿಬಂಧನೆಯನ್ನು
ಶಾಸನವನ್ನಾಗಿ ಮಾಡಿ ರುಜು ಹಾಕಿದನು.

10ದಾನಿಯೇಲನು ಯಾವಾಗಲೂ ಪ್ರತಿದಿನ ಮೂರು
ಸಲ ದೇವರಲ್ಲಿ ಪ್ರಾರ್ಥನೆಯನ್ನು ಮಾಡುತ್ತಿದ್ದನು.
ದಾನಿಯೇಲನು ಮೊಣಕಾಲೂರಿ ದೇವರಲ್ಲಿ ಪ್ರಾರ್ಥಿಸು
ತ್ತಿದ್ದನು ಮತ್ತು ದೇವರನ್ನು ಸ್ತುತಿಸುತ್ತಿದ್ದನು. ಈ ಹೊಸ
ಶಾಸನದ ಬಗ್ಗೆ ಕೇಳಿದ ಮೇಲೆ ದಾನಿಯೇಲನು ತನ್ನ
ಮನೆಯ ಮಹಡಿಯ ಮೇಲಿದ್ದ ತನ್ನ ಕೋಣೆಗೆ ಹೋಗಿ
ಜೆರುಸಲೇಮಿನ ಕಡೆಗೆ ತೆರೆದ ಕಿಟಕಿಯ ಬಳಿ ಮೊಣ
ಕಾಲೂರಿ ಎಂದಿನಂತೆ ಪ್ರಾರ್ಥನೆಮಾಡಿದನು.

11ಆಗ ಆ ಜನರು ಗುಂಪಾಗಿ ಹೋಗಿ ದಾನಿಯೇಲ
ನನ್ನು ನೋಡಿದರು. ದಾನಿಯೇಲನು ದೇವರಲ್ಲಿ
ಪ್ರಾರ್ಥಿಸಿ ಸಹಾಯ ಕೋರುತ್ತಿರುವದನ್ನು ಅವರು
ನೋಡಿದರು. 12ಅವರು ಅರಸನ ಬಳಿಗೆ ಹೋಗಿ ತಮ್ಮ
ಶಾಸನದ ಬಗ್ಗೆ ಅರಸನೊಂದಿಗೆ ಮಾತನಾಡಿದರು.
ಅವರು, ''ರಾಜನಾದ ದಾರ್ಯಾವೆಷನೇ. ಮುಂಬರುವ
ಮೂವತ್ತು ದಿನಗಳಲ್ಲಿ ಯಾರಾದರೂ ನಿನ್ನ ಹೊರತು
ಯಾವ ದೇವರಿಗಾಗಲೀ ಮನುಷ್ಯನಿಗಾಗಲೀ ಪ್ರಾರ್ಥನೆ
ಸಲ್ಲಿಸಿದರೆ ಅವರನ್ನು ಸಿಂಹದ ಗುಹೆಯಲ್ಲಿ ಎಸೆಯಲಾಗು
ವುದೆಂಬ ಶಾಸನಕ್ಕೆ ನೀನು ರುಜು ಹಾಕಿರುವಿಯಲ್ಲವೆ ?''
ಎಂದು ಕೇಳಿದರು.

ರಾಜನು, ''ಹೌದು, ನಾನು ಆ ಶಾಸನಕ್ಕೆ ರುಜು
ಹಾಕಿದ್ದೇನೆ. ಮೇದ್ಯಯರ ಮತ್ತು ಪಾರಸಿಯರ ಶಾಸನ
ಗಳು ರದ್ದಾಗುವದಿಲ್ಲ ಮತ್ತು ಬದಲಾವಣೆ ಹೊಂದುವ
ದಿಲ್ಲ'' ಎಂದು ಉತ್ತರ ಕೊಟ್ಟನು.

13ಆಗ ಅವರು ರಾಜನಿಗೆ,''ದಾನಿಯೇಲನೆಂಬ ಆ
ಮನುಷ್ಯ ನಿನ್ನ ಕಡೆಗೆ ಎಳ್ಳಷ್ಟೂ ಗಮನಕೊಡುತ್ತಿಲ್ಲ.
ಅವನು ಯೆಹೂದದ ಸೆರೆಯಾಳುಗಳಲ್ಲೊಬ್ಬನು. ನೀನು
ರುಜುಹಾಕಿದ ಶಾಸನಕ್ಕೆ ಅವನು ಸ್ವಲ್ಪವಾದರೂ ಬೆಲೆ
ಕೊಡುತ್ತಿಲ್ಲ. ದಾನಿಯೇಲನು ಈಗಲೂ ದಿನಕ್ಕೆ ಮೂರು
ಸಲ ತನ್ನ ದೇವರಲ್ಲಿ ಪ್ರಾರ್ಥಿಸುತ್ತಾನೆ'' ಎಂದು ಹೇಳಿ
ದರು. 14ಇದನ್ನು ಕೇಳಿ ಅರಸನಿಗೆ ದುಃಖವೂ ವ್ಯಸನವೂ
ಆಯಿತು. ದಾನಿಯೇಲನನ್ನು ರಕ್ಷಿಸಲು ಉಪಾಯ
ವೊಂದನ್ನು ಕಂಡುಹಿಡಿಯಲು ಸಾಯಂಕಾಲದವರೆಗೆ
ಯೋಚಿಸಿದನು. 15ಆಗ ಅವರು ಗುಂಪಾಗಿ ಅರಸನ ಬಳಿಗೆ
ಹೋಗಿ, ''ಅರಸನೇ, ನೆನಪಿಡು, ಮೇದ್ಯಯರ ಮತ್ತು
ಪಾರಸಿಯರ ಶಾಸನದ ಪ್ರಕಾರ ಅರಸನ ಹಸ್ತಾಕ್ಷರ
ದೊಂದಿಗೆ ಹೊರಡಿಸಿದ ರಾಜಾಜ್ಞೆಯನ್ನು ಎಂದಿಗೂ
ರದ್ದುಗೊಳಿಸಲಾಗುವುದಿಲ್ಲ; ಅದರಲ್ಲಿ ಬದಲಾವಣೆ
ಮಾಡಲಾಗುವುದಿಲ್ಲ ''ಎಂದರು.

16ರಾಜನಾದ ದಾರ್ಯಾವೆಷನು ಆಜ್ಞೆಯನ್ನು
ಕೊಟ್ಟನು. ಅವರು ದಾನಿಯೇಲನನ್ನು ಸಿಂಹಗಳ ಗುಹೆ
ಯಲ್ಲಿ ಎಸೆದರು. ಅರಸನು ದಾನಿಯೇಲನಿಗೆ, ''ನೀನು
ಸೇವೆ ಮಾಡುತ್ತಲೇ ಇರುವ ದೇವರು ನಿನ್ನನ್ನು ರಕ್ಷಿಸುವ
ನೆಂದು ನನಗೆ ಗೊತ್ತಿದೆ '' ಎಂದನು. 17ಒಂದು ದೊಡ್ಡ
ಕಲ್ಲು ಬಂಡೆಯನ್ನು ತಂದು ಆ ಸಿಂಹದ ಗುಹೆಯ ಬಾಯಿ
ಯನ್ನು ಮುಚ್ಚಿದರು. ಅರಸನು ತನ್ನ ಮುದ್ರೆಯುಂಗುರ
ದಿಂದ ಆ ಬಂಡೆಗೆ ಮುದ್ರೆಹಾಕಿದನು. ಅರಸನ ಅಧಿಕಾರಿ
ಗಳ ಮುದ್ರೆಯುಂಗುರಗಳಿಂದಲೂ ಸಹ ಆ ಕಲ್ಲು
ಬಂಡೆಗೆ ಮುದ್ರೆಹಾಕಲಾಯಿತು. ಇದರಿಂದಾಗಿ ಯಾರೂ
ಆ ಕಲ್ಲುಬಂಡೆಯನ್ನು ಸರಿಸಿ ದಾನಿಯೇಲನನ್ನು ಆ
ಸಿಂಹದ ಗುಹೆಯಿಂದ ಹೊರಗೆ ತೆಗೆಯದಂತಾಯಿತು.
18ರಾಜನಾದ ದಾರ್ಯಾವೆಷನು ಅರಮನೆಗೆ ಹಿಂತಿರುಗಿ
ದನು. ಆ ರಾತ್ರಿ ಅರಸನು ಊಟಮಾಡಲಿಲ್ಲ. ಮನೋ
ರಂಜನೆಗಾಗಿ ಯಾರನ್ನೂ ತನ್ನ ಹತ್ತಿರ ಬರಗೊಡಿಸಲಿಲ್ಲ.
ಇಡೀ ರಾತ್ರಿ ಅವನಿಗೆ ನಿದ್ರೆಯೇ ಬರಲಿಲ್ಲ.

19ಮರುದಿನ ಬೆಳಿಗ್ಗೆ ಸೂರ್ಯೋದಯದ ಹೊತ್ತಿಗೆ
ರಾಜನಾದ ದಾರ್ಯಾವೆಷನು ಎದ್ದನು. ಅವನು ಸಿಂಹಗಳ
ಗುಹೆಗೆ ಬೇಗಬೇಗನೆ ಹೋದನು.

20ರಾಜನಿಗೆ ಬಹಳ ಚಿಂತೆಯಾಗಿತ್ತು. ರಾಜನು
ಸಿಂಹಗಳ ಗುಹೆಗೆ ಹೋಗಿ, ''ದಾನಿಯೇಲನೇ, ಜೀವ
ಸ್ವರೂಪನಾದ ದೇವರ ಸೇವಕನೇ, ನೀನು ನಿತ್ಯವೂ ಸೇವೆ
ಮಾಡುವ ನಿನ್ನ ದೇವರು ನಿನ್ನನ್ನು ಸಿಂಹಗಳಿಂದ ಉಳಿಸಲು
ಶಕ್ತನಾದನೇ?'' ಎಂದು ಕೂಗಿ ಕೇಳಿದನು.

21ದಾನಿಯೇಲನು, ''ಅರಸನೇ, ಚಿರಂಜೀವಿ
ಯಾಗಿರು. 22ನನ್ನ ದೇವರು ನನ್ನನ್ನು ರಕ್ಷಿಸುವುದಕ್ಕಾಗಿ
ತನ್ನ ದೂತನನ್ನು ಕಳುಹಿಸಿದನು. ಆ ದೇವದೂತನು
ಸಿಂಹಗಳ ಬಾಯಿಯನ್ನು ಮುಚ್ಚಿದನು. ಸಿಂಹಗಳು
ನನ್ನನ್ನು ಗಾಯಗೊಳಿಸಲಿಲ್ಲ. ಏಕೆಂದರೆ ನಾನು ತಪ್ಪಿತಸ್ಥ
ನಲ್ಲವೆಂದು ನನ್ನ ದೇವರಿಗೆ ಗೊತ್ತುಂಟು. ರಾಜನೇ,
ನಾನೆಂದೂ ನಿನಗೆ ತಪ್ಪು ಮಾಡಲಿಲ್ಲ ''ಎಂದು
ಉತ್ತರಿಸಿದನು.

23ಅರಸನಾದ ದಾರ್ಯಾವೆಷನಿಗೆ ಬಹಳ ಸಂತೋಷ
ವಾಯಿತು. ದಾನಿಯೇಲನನ್ನು ಸಿಂಹಗಳ ಗುಹೆಯಿಂದ
ಮೇಲಕ್ಕೆ ಎತ್ತಿಸಬೇಕೆಂದು ತನ್ನ ಸೇವಕರಿಗೆ ಆಜ್ಞಾಪಿಸಿ
ದನು. ದಾನಿಯೇಲನನ್ನು ಸಿಂಹಗಳ ಗುಹೆಯಿಂದ ಹೊರ
ತೆಗೆದು ನೋಡಲಾಗಿ ಸಿಂಹಗಳಿಂದ ಅವನಿಗೆ ಯಾವ
ಗಾಯಗಳೂ ಆಗಿರಲಿಲ್ಲ. ದಾನಿಯೇಲನು ತನ್ನ ದೇವ
ರಲ್ಲಿ ನಂಬಿಕೆಯಿಟ್ಟಿದ್ದರಿಂದ ಅವನಿಗೆ ಸಿಂಹಗಳಿಂದ
ಯಾವ ನೋವೂ ಆಗಿರಲಿಲ್ಲ.

24ಆಗ ರಾಜನು ದಾನಿಯೇಲನ ಮೇಲೆ ದೋಷಾ
ರೋಪಣೆಯನ್ನು ಮಾಡಿದ ಜನರನ್ನು ಸಿಂಹಗಳ ಗುಹೆಗೆ

ಕರೆತರಬೇಕೆಂದು ಆಜ್ಞಾಪಿಸಿದನು. ಆ ಜನರನ್ನೂ ಅವರ
ಹೆಂಡತಿ ಮಕ್ಕಳನ್ನೂ ಸಹಿತವಾಗಿ ಸಿಂಹಗಳ ಗುಹೆಯಲ್ಲಿ
ಎಸೆಯಲಾಯಿತು. ಅವರು ಗುಹೆಯ ನೆಲಕ್ಕೆ ಮುಟ್ಟುವ
ಮೊದಲೇ ಸಿಂಹಗಳು ಅವರನ್ನು ಎಳೆದುಕೊಂಡವು.
ಸಿಂಹಗಳು ಅವರ ದೇಹಗಳನ್ನು ತಿಂದು ಎಲುಬುಗಳನ್ನು
ಅಗಿದುಹಾಕಿದವು.
25ಆಗ ಅರಸನಾದ ದಾರ್ಯಾವೆಷನು ಲೋಕದಲ್ಲೆಲ್ಲಾ
ವಾಸಿಸುವ ಸಕಲ ಜನಾಂಗ ಕುಲಭಾಷೆಗಳವರಿಗೆ ಈ
ಪತ್ರವನ್ನು ಬರೆದನು:

ಶುಭಾಶಯಗಳು.
26ನಾನೊಂದು ಹೊಸ ಶಾಸನವನ್ನು ಮಾಡುತ್ತಿ
ದ್ದೇನೆ. ಈ ಶಾಸನವು ನನ್ನ ರಾಜ್ಯದ ಎಲ್ಲ ಭಾಗಗಳ
ಜನರಿಗೆ ಅನ್ವಯಿಸುವುದು. ನೀವೆಲ್ಲರೂ ದಾನಿ
ಯೇಲನ ದೇವರಲ್ಲಿ ಭಯಭಕ್ತಿಯುಳ್ಳವರಾಗಿರ
ಬೇಕು.

ದಾನಿಯೇಲನ ದೇವರೇ ಜೀವಸ್ವರೂಪ
ನಾದ ದೇವರು. ಆತನು ನಿರಂತರವೂ ಇರು
ವಾತನಾಗಿದ್ದಾನೆ. ಆತನ ಸಾಮ್ರಾಜ್ಯವು
ಎಂದಿಗೂ ಹಾಳಾಗುವದಿಲ್ಲ. ಆತನ ಅಧಿ
ಪತ್ಯವು ಎಂದಿಗೂ ಮುಗಿಯುವದಿಲ್ಲ.
27 ದೇವರು ಜನರಿಗೆ ಸಹಾಯ ಮಾಡುತ್ತಾನೆ
ಮತ್ತು ರಕ್ಷಿಸುತ್ತಾನೆ. ದೇವರು ಭೂಮ್ಯಾ
ಕಾಶಗಳಲ್ಲಿ ಅದ್ಭುತಕಾರ್ಯಗಳನ್ನು ಮಾಡು
ತ್ತಾನೆ. ದೇವರು ದಾನಿಯೇಲನನ್ನು ಸಿಂಹಗ
ಳಿಂದ ರಕ್ಷಿಸಿದನು.’’

28ದಾನಿಯೇಲನು ದಾರ್ಯಾವೆಷನ ಆಳ್ವಿಕೆ
ಯಲ್ಲಿಯೂ ಪಾರಸಿಯನಾದ ಕೋರೆಷನ ಆಳ್ವಿಕೆ
ಯಲ್ಲಿಯೂ ಘನತೆಯನ್ನು ಪಡೆದನು.

## ನಾಲ್ಕು ಮೃಗಗಳ ವಿಷಯವಾಗಿ ದಾನಿಯೇಲನ ಕನಸು

7 ಬಾಬಿಲೋನಿನ ಅರಸನಾದ ಬೇಲ್ಶಚ್ಚರನ ಆಳ್ವಿಕೆಯ
ಮೊದಲನೆಯ ವರ್ಷದಲ್ಲಿ ದಾನಿಯೇಲನಿಗೆ ಒಂದು
ದರ್ಶನವಾಯಿತು. ತನ್ನ ಹಾಸಿಗೆಯ ಮೇಲೆ ಮಲಗಿರು
ವಾಗ ದಾನಿಯೇಲನು ಈ ದರ್ಶನಗಳನ್ನು ಕಂಡನು.
ದಾನಿಯೇಲನು ತನ್ನ ಕನಸಿನಲ್ಲಿ ಕಂಡದ್ದನ್ನು ಬರೆದಿ
ಟ್ಟನು. 2ದಾನಿಯೇಲನು ಇಂತೆಂದನು: ‘‘ನನಗಾದ
ರಾತ್ರಿಯ ದರ್ಶನದಲ್ಲಿ, ನಾಲ್ಕು ದಿಕ್ಕಿನಿಂದ ಗಾಳಿಯು
ಬೀಸುತ್ತಿತ್ತು. ಆ ಬಿರುಗಾಳಿಯು ಸಮುದ್ರವನ್ನು
ಕೆರಳಿಸಿತು. 3ನಾನು ನಾಲ್ಕು ದೊಡ್ಡ ಮೃಗಗಳನ್ನು ಕಂಡೆ.
ಅದರಲ್ಲಿ ಪ್ರತಿಯೊಂದು ಮೃಗವು ಉಳಿದ ಮೃಗಗಳಿಂದ
ಭಿನ್ನವಾಗಿತ್ತು. ಆ ನಾಲ್ಕು ಮೃಗಗಳು ಸಮುದ್ರದಿಂದ
ಹೊರಬಂದವು.
4‘‘ಮೊದಲು ಕಾಣಿಸಿದ ಮೃಗವು ಸಿಂಹದ ಹಾಗಿತ್ತು.
ಅದಕ್ಕೆ ಹದ್ದಿನಂತೆ ರೆಕ್ಕೆಗಳಿದ್ದವು. ನಾನು ಈ ಮೃಗವನ್ನು
ನೋಡುತ್ತಲೇ ಇರಲು ಅದರ ರೆಕ್ಕೆಗಳು ಕೀಳಲ್ಪಟ್ಟವು.
ಅದು ನೆಲದಿಂದ ಎತ್ತಲ್ಪಟ್ಟು ಮನುಷ್ಯನ ಹಾಗೆ ಎರಡು
ಕಾಲುಗಳ ಮೇಲೆ ನಿಲ್ಲಿಸಲ್ಪಟ್ಟಿತ್ತು. ಅದಕ್ಕೆ ಮನುಷ್ಯನ
ಹೃದಯವನ್ನು ಕೊಡಲಾಯಿತು.
5‘‘ಆಮೇಲೆ ನಾನು ಎರಡನೆ ಮೃಗವನ್ನು ಕಂಡೆ. ಆ
ಮೃಗವು ಕರಡಿಯ ಹಾಗೆ ಕಾಣಿಸಿತು. ಅದು ಒಂದು ಭಾಗ
ವನ್ನು ಮೇಲೆತ್ತಿಕೊಂಡಿತ್ತು. ತನ್ನ ಬಾಯಲ್ಲಿ ಹಲ್ಲುಗಳ
ನಡುವೆ ಮೂರು ಪಕ್ಕೆಲುಬುಗಳನ್ನು ಕಚ್ಚಿಕೊಂಡಿತ್ತು.
‘ಎದ್ದು ನಿನಗೆ ಬೇಕಾದಷ್ಟು ಮಾಂಸವನ್ನು ತಿನ್ನು’ ಎಂದು
ಅದಕ್ಕೆ ಹೇಳಲಾಯಿತು.
6‘‘ಆಮೇಲೆ ನಾನು ಮತ್ತೊಂದು ಮೃಗವನ್ನು ಕಂಡೆ.
ಈ ಮೃಗವು ಚಿರತೆಯ ಹಾಗೆ ಕಾಣಿಸಿತು. ಆ ಚಿರತೆಗೆ ಅದರ
ಬೆನ್ನಿನ ಮೇಲೆ ನಾಲ್ಕು ರೆಕ್ಕೆಗಳಿದ್ದವು. ಈ ರೆಕ್ಕೆಗಳು
ಪಕ್ಷಿಗಳ ರೆಕ್ಕೆಗಳಂತಿದ್ದವು. ಈ ಮೃಗಕ್ಕೆ ನಾಲ್ಕು ತಲೆಗ
ಳಿದ್ದವು. ಅದಕ್ಕೆ ದೊರೆತನವನ್ನು ಕೊಡಲಾಯಿತು.
7‘‘ನನಗಾದ ರಾತ್ರಿಯ ದರ್ಶನದಲ್ಲಿ ನಾಲ್ಕನೆ ಮೃಗ
ವನ್ನು ಕಂಡೆ. ಅದು ಅತ್ಯಂತ ಬಲಿಷ್ಠವಾಗಿತ್ತು ಮತ್ತು
ಭಯಂಕರವಾಗಿತ್ತು. ಅದು ಅತಿ ಶಕ್ತಿಶಾಲಿಯಾಗಿತ್ತು.
ಅದಕ್ಕೆ ದೊಡ್ಡದೊಡ್ಡ ಕಬ್ಬಿಣದ ಹಲ್ಲುಗಳಿದ್ದವು. ಈ
ಪ್ರಾಣಿಯು ತಾನು ಬೇಟೆಯಾಡಿದ ಪಶುವನ್ನು ತುಂಡು
ತುಂಡು ಮಾಡುತ್ತಾ ತಿನ್ನುತ್ತಿತ್ತು; ಮಿಕ್ಕಿದ್ದನ್ನು ಅದು
ತುಳಿಯುತ್ತಿತ್ತು. ಈ ನಾಲ್ಕನೆಯ ಪ್ರಾಣಿಯು ನಾನು
ಅದಕ್ಕೂ ಮುಂಚೆ ನೋಡಿದ ಮೃಗಗಳಿಗಿಂತ ಭಿನ್ನ
ವಾಗಿತ್ತು. ಈ ಮೃಗಕ್ಕೆ ಹತ್ತು ಕೊಂಬುಗಳಿದ್ದವು.
8‘‘ನಾನು ಆ ಕೊಂಬುಗಳನ್ನು ನೋಡುತ್ತಿರಲು,
ಅವುಗಳ ನಡುವೆ ಇನ್ನೊಂದು ಚಿಕ್ಕ ಕೊಂಬು ಮೊಳೆ
ಯಿತು. ಅದರ ದೆಸೆಯಿಂದ ಮುಂಚಿನ ಕೊಂಬುಗಳಲ್ಲಿ
ಮೂರು, ಬೇರು ಸಹಿತ ಕೀಳಲ್ಪಟ್ಟವು. ಈ ಚಿಕ್ಕ ಕೊಂಬಿನ
ಮೇಲೆ ಕಣ್ಣುಗಳಿದ್ದವು. ಈ ಕಣ್ಣುಗಳು ಮನುಷ್ಯನ
ಕಣ್ಣಿನಂತಿದ್ದವು. ಈ ಚಿಕ್ಕ ಕೊಂಬಿನ ಮೇಲೆ ಒಂದು
ಬಾಯಿ ಇತ್ತು; ಆ ಬಾಯಿ ಜಂಬ ಕೊಚ್ಚಿಕೊಳ್ಳುತ್ತಿತ್ತು.
ಆ ಚಿಕ್ಕ ಕೊಂಬು ಮುಂಚಿನ ಕೊಂಬುಗಳಲ್ಲಿ ಮೂರನ್ನು
ಕಿತ್ತುಹಾಕಿತು.

9 ‘‘ನಾನು ನೋಡುತ್ತಿದ್ದಂತೆಯೇ, ಆಸನಗಳನ್ನು
ಅವುಗಳ ಸ್ಥಳದಲ್ಲಿ ಹಾಕಲಾಯಿತು. ಪುರಾತನ

ರಾಜನು ತನ್ನ ಆಸನದ ಮೇಲೆ ಕುಳಿತುಕೊಂಡನು.
ಆತನ ಉಡುಪು ಬಹಳ ಶುಭ್ರವಾಗಿತ್ತು. ಅದು
ಹಿಮದಂತೆ ಶುಭ್ರವಾಗಿತ್ತು. ಆತನ ತಲೆಗೂದಲು
ಶುಭ್ರವಾಗಿತ್ತು. ಅದು ಬಿಳಿಯ ಉಣ್ಣೆಯಂತೆ
ಶುಭ್ರವಾಗಿತ್ತು. ಆತನ ಆಸನವು ಬೆಂಕಿಯಿಂದ
ಮಾಡಲಾಗಿತ್ತು. ಅದರ ಚಕ್ರಗಳು ಬೆಂಕಿಯ
ಜ್ವಾಲೆಗಳಿಂದ ಮಾಡಲಾಗಿದ್ದವು.
10 ಆ ಪುರಾತನ ರಾಜನ ಮುಂದೆ ಬೆಂಕಿಯ ನದಿ
ಯೊಂದು ಹರಿಯುತಲಿತ್ತು. ಲಕ್ಷೋಪಲಕ್ಷ
ದೂತರು ಆತನನ್ನು ಸೇವಿಸುತ್ತಲಿದ್ದರು.
ಕೋಟ್ಯಾನುಕೋಟಿ ಪರಲೋಕ ಸಮೂಹದ
ವರು ಆತನ ಮುಂದೆ ನಿಂತಿದ್ದರು. ನ್ಯಾಯಾಲ
ಯವು ಪ್ರಾರಂಭವಾಗುವದಕ್ಕೆ ಎಲ್ಲ ಸಿದ್ಧತೆಗಳು
ಆಗಿದ್ದವು ಮತ್ತು ಪುಸ್ತಕಗಳು ತೆರೆಯಲ್ಪಟ್ಟವು.

11‘‘ನಾನು ನೋಡುತ್ತಲೇ ಇದ್ದುಬಿಟ್ಟೆ. ಏಕೆಂದರೆ ಆ
ಚಿಕ್ಕ ಕೊಂಬು ಜಂಭ ಕೊಚ್ಚಿಕೊಳ್ಳುತ್ತಿತ್ತು. ಕೊನೆಗೆ
ನಾಲ್ಕನೆ ಮೃಗವು ಕೊಲ್ಲಲ್ಪಟ್ಟಿತು. ಅದರ ಹೆಣವನ್ನು
ಉರಿಯುವ ಬೆಂಕಿಗೆ ಹಾಕಿ ನಾಶಮಾಡಲಾಯಿತು.
12 ಮಿಕ್ಕ ಮೃಗಗಳ ಅಧಿಕಾರವನ್ನು ಮತ್ತು ಅಧಿಪತ್ಯವನ್ನು
ಅವುಗಳಿಂದ ತೆಗೆದುಕೊಳ್ಳಲಾಯಿತು. ಆದರೆ ಕೆಲವು
ಕಾಲದವರೆಗೆ ಅವುಗಳಿಗೆ ಜೀವದಿಂದ ಇರಲು ಅವಕಾಶ
ಕೊಡಲಾಯಿತು.

13‘‘ನನಗಾದ ರಾತ್ರಿಯ ದರ್ಶನದಲ್ಲಿ, ನನ್ನ ಎದುರಿಗೆ
ಮನುಷ್ಯಕುಮಾರನಂತಿರುವವನನ್ನು ಕಂಡೆ. ಆತನು
ಆಕಾಶದಲ್ಲಿ ಮೇಘಗಳ ಮೇಲೆ ಬರುತ್ತಿದ್ದನು. ಅವನು
ಆ ಪುರಾತನ ರಾಜನ ಸಮೀಪಕ್ಕೆ ಬಂದನು; ಅವನನ್ನು ಆ
ಮಹಾವೃದ್ಧನ ಸನ್ನಿಧಿಗೆ ತರಲಾಯಿತು.

14‘‘ಮನುಷ್ಯಕುಮಾರನಂತಿರುವ ಆ ವ್ಯಕ್ತಿಗೆ ದೊರೆತನ,
ಘನತೆ ಮತ್ತು ಆಳುವ ಸಂಪೂರ್ಣ ಅಧಿಕಾರವನ್ನು ಕೊಡ
ಲಾಯಿತು. ಸಕಲ ಜನರು, ಜನಾಂಗಗಳು ಮತ್ತು ಎಲ್ಲ
ಭಾಷೆಯ ಜನರು ಅವನನ್ನು ಸೇವಿಸುವರು. ಅವನ ಅಧಿ
ಕಾರವು ಶಾಶ್ವತ, ಅವನ ರಾಜ್ಯವು ಎಂದಿಗೂ ಅಳಿಯದು.

## ನಾಲ್ಕನೆಯ ಮೃಗದ ಬಗ್ಗೆ ಬಿದ್ದ ಕನಸಿನ ಅರ್ಥ

15‘‘ದಾನಿಯೇಲನಾದ ನಾನು ಭ್ರಾಂತಿಗೊಳಗಾದೆ
ಮತ್ತು ತೊಂದರೆಪಟ್ಟೆ. ನಾನು ಕಂಡ ದರ್ಶನಗಳು ನನ್ನನ್ನು
ಪೀಡಿಸಿದವು. 16 ನಾನು ಅಲ್ಲಿ ನಿಂತಿದ್ದವರಲ್ಲಿ ಒಬ್ಬನ ಬಳಿಗೆ
ಹೋದೆ. ಇದೆಲ್ಲದರ ಅರ್ಥವೇನೆಂದು ಅವನನ್ನು ಕೇಳಿದೆ.
ಅವನು ಇವುಗಳ ಅರ್ಥವನ್ನು ವಿವರಿಸಿ ದನು. 17 ಅವನು,
‘ಆ ನಾಲ್ಕು ದೊಡ್ಡ ಮೃಗಗಳು ಅಂದರೆ ನಾಲ್ಕು
ರಾಜ್ಯಗಳು. ಆ ರಾಜ್ಯಗಳು ಭೂಮಿಯಿಂದ ಹುಟ್ಟುವವು.
18 ಆದರೆ ದೇವರ ವಿಶೇಷ ಜನರಿಗೆ ಆ ಸಾಮ್ರಾಜ್ಯಗಳು
ದೊರೆಯುವವು. ಅವರು ಆ ಸಾಮ್ರಾಜ್ಯ ವನ್ನು
ಶಾಶ್ವತವಾಗಿ ಅನುಭವಿಸುವರು’ ಎಂದು ಹೇಳಿ ದನು.
19‘‘ಆಮೇಲೆ ನಾನು, ‘ನಾಲ್ಕನೆಯ ಮೃಗ ಯಾವುದು?
ಅದು ಏನನ್ನು ಸೂಚಿಸುತ್ತದೆ?’ ಎಂಬು ದನ್ನು
ತಿಳಿದುಕೊಳ್ಳಬಯಸಿದೆ. ನಾಲ್ಕನೆಯ ಮೃಗವು ಉಳಿದೆಲ್ಲ
ಮೃಗಗಳಿಂದ ಭಿನ್ನವಾಗಿತ್ತು. ಅದು ಬಹಳ ಭಯಾನಕ
ವಾಗಿತ್ತು. ಅದಕ್ಕೆ ಕಬ್ಬಿಣದ ಹಲ್ಲುಗಳು ಮತ್ತು ಕಂಚಿನ
ಉಗುರುಗಳಿದ್ದವು. ಅದು ತಾನು ಬೇಟೆಯಾಡಿದ
ಪಶುವನ್ನು ತುಂಡುತುಂಡು ಮಾಡಿ ಸಂಪೂರ್ಣವಾಗಿ
ತಿಂದು ಮಿಕ್ಕಿದ್ದನ್ನು ಕಾಲಿನಿಂದ ತುಳಿದುಹಾಕುತ್ತಿತ್ತು.
20 ನಾಲ್ಕನೆಯ ಪ್ರಾಣಿಯ ತಲೆಯ ಮೇಲಿದ್ದ ಹತ್ತು
ಕೊಂಬುಗಳ ಬಗ್ಗೆ ನಾನು ತಿಳಿದುಕೊಳ್ಳಬಯಸಿದೆ. ನಾನು
ಅಲ್ಲಿ ಮೊಳೆತ ಚಿಕ್ಕ ಕೊಂಬಿನ ಬಗ್ಗೆ ತಿಳಿದುಕೊಳ್ಳ
ಬಯಸಿದೆ. ಆ ಚಿಕ್ಕ ಕೊಂಬು ಅಲ್ಲಿದ್ದ ಹತ್ತು ಕೊಂಬುಗ
ಳಲ್ಲಿ ಮೂರನ್ನು ಬೀಳಿಸಿಬಿಟ್ಟಿತು. ಈ ಚಿಕ್ಕ ಕೊಂಬು
ಉಳಿದ ಕೊಂಬುಗಳಿಗಿಂತ ಕೀಳಾಗಿ ಕಂಡುಬಂತು. ಅದಕ್ಕೆ
ಮನುಷ್ಯರ ಕಣ್ಣುಗಳಂತೆ ಕಣ್ಣುಗಳಿದ್ದವು. ಆ ಚಿಕ್ಕ
ಕೊಂಬು ಜಂಭ ಕೊಚ್ಚಿಕೊಳ್ಳುತ್ತಿತ್ತು. 21 ನಾನು ನೋಡು
ತ್ತಿದ್ದಂತೆಯೇ ಈ ಚಿಕ್ಕ ಕೊಂಬು ದೇವಭಕ್ತರ ಮೇಲೆ
ಬಿದ್ದು ಅವರೊಂದಿಗೆ ಯುದ್ಧಮಾಡುತ್ತಿತ್ತು. ಆ ಕೊಂಬು
ಅವರ ಕೊಲೆ ಮಾಡುತ್ತಿತ್ತು. 22 ಮಹಾವೃದ್ಧನು ಬಂದು
ನ್ಯಾಯತೀರಿಸುವವರೆಗೂ ಆ ಚಿಕ್ಕ ಕೊಂಬು ದೇವಭಕ್ತರ
ಕೊಲೆಮಾಡುತ್ತಿತ್ತು. ಪುರಾತನ ರಾಜನು ಈ ಚಿಕ್ಕ
ಕೊಂಬಿನ ಬಗ್ಗೆ ತೀರ್ಪನ್ನು ಕೊಟ್ಟನು. ಈ ತೀರ್ಪು ದೇವ
ಭಕ್ತರ ಪರವಾಗಿತ್ತು. ಆದ್ದರಿಂದ ಅವರು ಸಾಮ್ರಾಜ್ಯವನ್ನು
ಪಡೆದರು.

23‘‘ಅವನು ನನಗೆ ಈ ರೀತಿ ವಿವರಿಸಿದನು: ‘ನಾಲ್ಕನೆಯ
ಮೃಗವು ಈ ಲೋಕದಲ್ಲಿ ಉಂಟಾಗುವ ನಾಲ್ಕನೆಯ
ರಾಜ್ಯ. ಇದು ಬೇರೆಲ್ಲ ರಾಜ್ಯಗಳಿಂದ ಭಿನ್ನವಾಗಿರುತ್ತದೆ.
ಆ ನಾಲ್ಕನೆಯ ರಾಜ್ಯವು ಜಗತ್ತಿನ ಜನರನ್ನೆಲ್ಲ ನಾಶಗೊಳಿ
ಸುವುದು. ಇದು ಜಗತ್ತಿನ ಎಲ್ಲ ರಾಷ್ಟ್ರಗಳನ್ನು ತುಳಿದು
ಪುಡಿಪುಡಿ ಮಾಡುವುದು. 24 ಹತ್ತು ಕೊಂಬುಗಳು ಈ
ನಾಲ್ಕನೆಯ ರಾಜ್ಯದ ಹತ್ತು ಜನ ಅರಸರನ್ನು ಸೂಚಿಸು
ತ್ತವೆ. ಆ ಹತ್ತು ಜನ ಅರಸರ ತರುವಾಯ ಮತ್ತೊಬ್ಬ
ಅರಸನು ಬರುವನು. ಅವನು ತನಗಿಂತಲೂ ಮುಂಚೆ
ರಾಜ್ಯಭಾರ ಮಾಡಿದ ಅರಸರಿಗಿಂತ ಭಿನ್ನನಾಗಿರುವನು.
ಅವನು ಬೇರೆ ಅರಸರುಗಳಲ್ಲಿ ಮೂವರನ್ನು ಸೋಲಿಸು
ವನು. 25 ಈ ವಿಶಿಷ್ಟ ರಾಜನು ಮಹೋನ್ನತನಾದ ದೇವರ
ವಿರುದ್ಧ ಮಾತನಾಡುವನು. ಆ ರಾಜನು ದೇವರ ಪರಮ
ಭಕ್ತರಿಗೆ ತೊಂದರೆ ಕೊಡುವನು ಮತ್ತು ಕೊಲೆ ಮಾಡು
ವನು. ಆ ರಾಜನು ರೂಢಿಯಲ್ಲಿದ್ದ ಧರ್ಮವಿಧಿಗಳನ್ನು

ಮಾರ್ಪಡಿಸುವ ಪ್ರಯತ್ನ ಮಾಡುವನು. ಆ ಭಕ್ತರು
ಒಂದು ಕಾಲ, ಎರಡು ಕಾಲ, ಅರ್ಧಕಾಲ* ಅವನ
ಕೈವಶವಾಗಿರುವರು.
26‘ಆಮೇಲೆ ಏನಾಗಬೇಕೆಂಬುದನ್ನು ನ್ಯಾಯ ಸಭೆಯು
ನಿರ್ಣಯಿಸುವುದು. ಆ ರಾಜನ ಅಧಿಕಾರವನ್ನು
ಕಸಿದುಕೊಳ್ಳಲಾಗುವುದು. ಅವನ ಸಾಮ್ರಾಜ್ಯವು ಸಂಪೂ
ರ್ಣವಾಗಿ ಕೊನೆಗೊಳ್ಳುವುದು. 27ಆಗ ದೇವಭಕ್ತರು
ರಾಜ್ಯವನ್ನು ಆಳುವರು. ಅವರು ಸಮಸ್ತ ಭೂಮಂಡಲದ
ರಾಜ್ಯಗಳ ಮೇಲೆ ಆಳ್ವಿಕೆ ಮಾಡುವರು. ಈ ಸಾಮ್ರಾಜ್ಯವು
ಕೊನೆಯವರೆಗೂ ಉಳಿಯುವುದು. ಮಿಕ್ಕ ಎಲ್ಲ ರಾಜ್ಯ
ಗಳ ಜನರು ಅವರನ್ನು ಗೌರವಿಸುವರು ಮತ್ತು
ಸೇವಿಸುವರು.’
28‘‘ಇಲ್ಲಿಗೆ ಕನಸು ಮುಕ್ತಾಯವಾಯಿತು. ದಾನಿಯೇ
ಲನೆಂಬ ಹೆಸರಿನ ನಾನು ಬಹಳ ಹೆದರಿದ್ದೆ. ಭಯದಿಂದ
ನನ್ನ ಮುಖ ಬಿಳುಚಿ ಹೋಗಿತ್ತು. ಆದರೆ ನಾನು ನೋಡಿದ
ಮತ್ತು ಕೇಳಿದ ವಿಷಯಗಳ ಬಗ್ಗೆ ಬೇರೆಯವರಿಗೆ
ಹೇಳಲಿಲ್ಲ.’’

## ದಾನಿಯೇಲನು ಕನಸಿನಲ್ಲಿ ಕಂಡ ಟಗರು ಮತ್ತು ಹೋತ

8 ಅರಸನಾದ ಬೇಲ್ಶಚ್ಚರನ ಆಳ್ವಿಕೆಯ ಮೂರನೆಯ
ವರ್ಷದಲ್ಲಿ ನಾನು ಈ ದರ್ಶನಗಳನ್ನು ಕಂಡೆನು.
ಇದು ಮೊದಲಿನ ದರ್ಶನದ ತರುವಾಯ ಕಂಡದ್ದು.
2ದರ್ಶನದಲ್ಲಿ ನಾನು ಶೂಷನ್ ನಗರದಲ್ಲಿದ್ದೆನು.
ಶೂಷನ್ ನಗರವು ಏಲಾಮ್ ಸಂಸ್ಥಾನದ ರಾಜಧಾನಿ
ಯಾಗಿತ್ತು. ನಾನು ಊಲಾ ನದಿಯ ದಡದ ಮೇಲೆ
ನಿಂತುಕೊಂಡಿದ್ದೆನು. 3ನಾನು ಕಣ್ಣೆತ್ತಿ ನೋಡಲಾಗಿ
ಊಲಾ ನದಿಯ ಪಕ್ಕದಲ್ಲಿ ನಿಂತುಕೊಂಡಿದ್ದ ಟಗ
ರೊಂದು ನನ್ನ ಕಣ್ಣಿಗೆ ಬಿತ್ತು. ಟಗರಿಗೆ ಎರಡು ಉದ್ದವಾದ
ಕೊಂಬುಗಳಿದ್ದವು. ಆ ಎರಡು ಕೊಂಬುಗಳು ಉದ್ದ
ವಾಗಿದ್ದರೂ ಒಂದು ಕೊಂಬು ಇನ್ನೊಂದು ಕೊಂಬಿಗಿಂತ
ಉದ್ದವಾಗಿತ್ತು. ಉದ್ದವಾದ ಕೊಂಬು ಇನ್ನೊಂದು
ಕೊಂಬಿಗಿಂತ ಹಿಂದಕ್ಕೆ ಇತ್ತು. 4ಆ ಟಗರು ತನ್ನ ಕೊಂಬುಗ
ಳಿಂದ ಎಲ್ಲ ಕಡೆಗೂ ಹಾಯುತ್ತಿತ್ತು. ಆ ಟಗರು
ಪಶ್ಚಿಮಕ್ಕೂ ಉತ್ತರಕ್ಕೂ ದಕ್ಷಿಣಕ್ಕೂ ಜಿಗಿದಾಡುತ್ತಿತ್ತು.
ಯಾವ ಪ್ರಾಣಿಗೂ ಆ ಟಗರನ್ನು ತಡೆಯಲಾಗಲಿಲ್ಲ. ಮಿಕ್ಕ
ಪ್ರಾಣಿಗಳನ್ನು ರಕ್ಷಿಸುವುದು ಯಾರಿಂದಲೂ ಆಗಲಿಲ್ಲ.
ಆ ಟಗರು ತನ್ನ ಮನಸ್ಸಿಗೆ ಬಂದಂತೆ ಮಾಡಲು ಸಾಧ್ಯ
ವಾಯಿತು. ಆ ಟಗರು ಬಹಳ ಪ್ರಬಲವಾಯಿತು.
5ನಾನು ಟಗರಿನ ಬಗ್ಗೆ ಯೋಚಿಸಿದೆ. ನಾನು ಯೋಚನೆ
ಮಾಡುತ್ತಿರುವಾಗಲೇ ಪಶ್ಚಿಮ ದಿಕ್ಕಿನಿಂದ ಒಂದು
ಹೋತವು ಬರುವುದನ್ನು ಕಂಡೆ. ಈ ಹೋತವು ಇಡೀ
ಭೂಮಂಡಲದ ಮೇಲೆಲ್ಲಾ ಓಡಾಡಿತು. ಅದು ತನ್ನ
ಕಾಲುಗಳು ನೆಲಕ್ಕೆ ಸೋಕದಂತೆ ಓಡುತ್ತಿತ್ತು. ಈ ಹೋತಕ್ಕೆ
ಎದ್ದುಕಾಣುವ ಒಂದು ದೊಡ್ಡ ಕೊಂಬು ಇತ್ತು. ಆ
ಕೊಂಬು ಸರಿಯಾಗಿ ಆ ಹೋತದ ಎರಡು ಕಣ್ಣುಗಳ
ಮಧ್ಯದಲ್ಲಿತ್ತು. 6ಆ ಹೋತವು ಟಗರಿನ ಹತ್ತಿರಕ್ಕೆ
ಬಂದಿತು. ನಾನು ಊಲಾ ನದಿಯ ದಡದ ಮೇಲೆ
ನೋಡಿದ ಟಗರೇ ಇದಾಗಿತ್ತು. ಆ ಹೋತಕ್ಕೆ ಬಹಳ
ಕೋಪ ಬಂದಿತು; ಅದು ವೇಗದಿಂದ ಟಗರಿನ ಕಡೆಗೆ
ಓಡಿತು. 7ಹೋತವು ಟಗರಿನ ಕಡೆಗೆ ಓಡುವದನ್ನು ನಾನು
ನೋಡುತ್ತಿದ್ದೆ. ಅದು ಅತಿ ಕೋಪದಿಂದ ಟಗರಿನ ಎರಡು
ಕೊಂಬುಗಳನ್ನು ಮುರಿದು ಬಿಟ್ಟಿತು. ಟಗರಿಗೆ ಆ
ಹೋತವನ್ನು ತಡೆದು ನಿಲ್ಲಿಸಲಾಗಲಿಲ್ಲ. ಆ ಹೋತವು
ಟಗರನ್ನು ನೆಲಕ್ಕೆ ಉರುಳಿಸಿ ತುಳಿದುಹಾಕಿತು. ಟಗರನ್ನು
ಹೋತದಿಂದ ರಕ್ಷಿಸಲು ಅಲ್ಲಿ ಯಾರೂ ಇರಲಿಲ್ಲ.
8ಹೋತವು ಬಹಳ ಪ್ರಬಲವಾಯಿತು. ಆದರೆ ಅದು
ಪ್ರಾಬಲ್ಯಕ್ಕೆ ಬಂದಾಗಲೇ ಅದರ ದೊಡ್ಡ ಕೊಂಬು
ಮುರಿದುಹೋಯಿತು. ಆ ಒಂದು ದೊಡ್ಡ ಕೊಂಬು ಇದ್ದ
ಸ್ಥಳದಲ್ಲಿ ನಾಲ್ಕು ಕೊಂಬುಗಳು ಮೊಳೆತವು. ಆ ಕೊಂಬು
ಗಳು ಸ್ಪಷ್ಟವಾಗಿ ಕಾಣಿಸುತ್ತಿದ್ದವು. ಆ ನಾಲ್ಕು ಕೊಂಬುಗಳು
ನಾಲ್ಕು ಬೇರೆಬೇರೆ ದಿಕ್ಕುಗಳಲ್ಲಿ ಚಾಚಿಕೊಂಡವು.
9ಆಗ ಅವುಗಳಿಂದ ಒಂದು ಚಿಕ್ಕ ಕೊಂಬು ಮೊಳೆ
ಯಿತು. ಆ ಚಿಕ್ಕ ಕೊಂಬು ಬೆಳೆದು ಬಹಳ ದೊಡ್ಡ
ದಾಯಿತು. ಅದು ಆಗ್ನೇಯಕ್ಕೆ ಬೆಳೆಯಿತು. ಅದು
ದಕ್ಷಿಣಕ್ಕೆ, ಪೂರ್ವಕ್ಕೆ ಮತ್ತು ಸುಂದರವಾದ ನಾಡಿಗೆ ಬೆಳೆ
ಯಿತು. 10ಆ ಚಿಕ್ಕ ಕೊಂಬು ಬಹಳ ದೊಡ್ಡದಾಯಿತು.
ಅದು ಗಗನಚುಂಬಿಯಾಗಿ (ಆಕಾಶಕ್ಕೆ ಮುಟ್ಟುವಂತೆ)
ಬೆಳೆಯಿತು. ಆ ಚಿಕ್ಕ ಕೊಂಬು ಆಕಾಶದ ಕೆಲವು ನಕ್ಷತ್ರ
ಗಳನ್ನು ನೆಲಕ್ಕೆ ಬೀಳಿಸಿತು ಮತ್ತು ಎಲ್ಲ ನಕ್ಷತ್ರಗಳ ಮೇಲೆ
ಹತ್ತಿತ್ತು. 11ಆ ಚಿಕ್ಕ ಕೊಂಬು ಅತಿ ಪ್ರಬಲವಾಯಿತು ಮತ್ತು
ನಕ್ಷತ್ರಗಳ ಅಧಿಪತಿಯನ್ನು (ದೇವರನ್ನು) ವಿರೋಧಿಸ
ತೊಡಗಿತು. ಆ ಚಿಕ್ಕ ಕೊಂಬು ನಕ್ಷತ್ರಗಳ ಅಧಿಪತಿಗೆ
(ದೇವರಿಗೆ) ನಿತ್ಯಹೋಮಗಳು ಸಲ್ಲದಂತೆ ಮಾಡಿತು.
ಜನರು ನಕ್ಷತ್ರಾಧಿಪತಿಯನ್ನು (ದೇವರನ್ನು) ಪೂಜಿಸುವ
ಸ್ಥಳವನ್ನು ಕೆಡವಿಬಿಟ್ಟಿತು. 12ಆ ಚಿಕ್ಕ ಕೊಂಬು ನಿತ್ಯ
ಹೋಮಗಳನ್ನು ತಡೆಯುವ ಪಾಪವನ್ನು ಮಾಡಿತು. ಅದು
ಒಳ್ಳೆಯತನವನ್ನು (ಸತ್ಯ, ಧರ್ಮವನ್ನು) ನೆಲಕ್ಕೆ ತಳ್ಳಿತು.
ಇದೆಲ್ಲವನ್ನು ಮಾಡಿ ಆ ಚಿಕ್ಕ ಕೊಂಬು ತನ್ನ ಇಷ್ಟಾರ್ಥ
ವನ್ನು ಸಾಧಿಸುವದರಲ್ಲಿ ಜಯ ಪಡೆಯಿತು.
13ಆಗ ಒಬ್ಬ ಪವಿತ್ರನು * ಮಾತನಾಡುವದನ್ನು ಕೇಳಿದೆ.
ಮತ್ತೊಬ್ಬ ಪವಿತ್ರನು ಮೊದಲನೆಯ ಪವಿತ್ರನಿಗೆ

**ಒಂದು ಕಾಲ … ಅರ್ಧಕಾಲ** ಅಂದರೆ ಬಹುಶಃ ಮೂರುವರೆ ವರ್ಷ.

**ಪವಿತ್ರನು** ದೇವದೂತ.

ಉತ್ತರಿಸುವದನ್ನೂ ಕೇಳಿದೆ. ಮೊದಲನೆಯ ಪವಿತ್ರನು,
“ಈ ದರ್ಶನ ನಿತ್ಯಹೋಮಗಳಿಗೆ ಏನಾಗುವದೆಂಬು
ದನ್ನು ತೋರಿಸುವದು. ಇದು ಆ ಭಯಾನಕ ಪಾಪದ
ಕುರಿತಾಗಿದೆ. ಅಧಿಪತಿಯು ಆರಾಧಿಸಲ್ಪಡುವ ಪವಿತ್ರಾಲ
ಯವನ್ನು ಜನರು ಹಾಳುಮಾಡಿದರೆ, ಜನರು ಆ ಸ್ಥಳವನ್ನು
ತುಳಿದಾಡಿದರೆ, ಆ ನಕ್ಷತ್ರಗಳ ಮೇಲೆ ಜನರು ನಡೆದಾಡಿ
ದರೆ ಏನಾಗುವದೆಂಬುದನ್ನು ಇದು ತೋರಿಸಿಕೊಡು
ತ್ತದೆ. ಆದರೆ ಇದೆಲ್ಲ ಎಷ್ಟು ದಿನ ನಡೆಯುವದು?”
ಎಂದನು. 14ಇನ್ನೊಬ್ಬ ಪವಿತ್ರನು, “ಇದೆಲ್ಲಾ ಎರಡು
ಸಾವಿರದ ಮುನ್ನೂರು ದಿನಗಳವರೆಗೆ ನಡೆಯುವುದು.
ಆಮೇಲೆ ಪವಿತ್ರಾಲಯಕ್ಕೆ ಪುನಃ ನ್ಯಾಯ ಸಿಕ್ಕುವುದು”
ಎಂದು ಉತ್ತರಿಸಿದನು.

### ದಾನಿಯೇಲನಿಗೆ ದರ್ಶನದ ಅರ್ಥವನ್ನು ವಿವರಿಸಲಾಯಿತು

15ದಾನಿಯೇಲನೆಂಬ ನಾನು ಈ ದರ್ಶನವನ್ನು ಕಂಡೆ
ಮತ್ತು ಅದರ ಅರ್ಥವನ್ನು ತಿಳಿದುಕೊಳ್ಳುವ ಪ್ರಯತ್ನ
ಮಾಡಿದೆ. ನಾನು ಈ ದರ್ಶನದ ಬಗ್ಗೆ ವಿಚಾರ ಮಾಡು
ತ್ತಿದ್ದಾಗ ಮನುಷ್ಯನಂತಿದ್ದವನೊಬ್ಬನು ನನ್ನ ಎದುರಿಗೆ
ನಿಂತಿದ್ದನು. 16ಆಗ ನಾನು ಮನುಷ್ಯನ ಧ್ವನಿಯನ್ನು
ಕೇಳಿದೆ. ಈ ಧ್ವನಿಯು ಊಲಾ ನದಿಯ ಮೇಲಿಂದ
ಬಂದಿತು. ಆ ಧ್ವನಿಯು, “ಗಬ್ರಿಯೇಲನೇ, ಕನಸಿನ
ಅರ್ಥವನ್ನು ಈ ಮನುಷ್ಯನಿಗೆ ತಿಳಿಸು ”ಎಂದು ಆದೇಶ
ಕೊಟ್ಟಿತು.

17ಆಗ ಮನುಷ್ಯನಂತಿದ್ದ ಗಬ್ರಿಯೇಲನು ನಾನು
ನಿಂತಲ್ಲಿಗೆ ಬಂದನು. ಅವನು ತೀರ ನನ್ನ ಹತ್ತಿರಕ್ಕೆ
ಬಂದಾಗ ನನಗೆ ಬಹಳ ಭಯವಾಯಿತು. ನಾನು ನೆಲಕ್ಕೆ
ಬಿದ್ದೆ. ಆದರೆ ಗಬ್ರಿಯೇಲನು ನನಗೆ, “ಮನುಷ್ಯನೇ, ಈ
ದರ್ಶನ ಪ್ರಳಯಕಾಲದ (ಅಂತ್ಯಕಾಲದ) ಬಗ್ಗೆ ಇದೆ
ಎಂಬುದನ್ನು ತಿಳಿದುಕೋ” ಎಂದು ಹೇಳಿದನು.

18ಗಬ್ರಿಯೇಲನು ನನ್ನೊಂದಿಗೆ ಮಾತನಾಡುತ್ತಿದ್ದಾಗ
ನಾನು ನಿದ್ರಾವಶನಾದೆನು. ಅದು ಬಹಳ ಗಾಢವಾದ ನಿದ್ರೆ
ಯಾಗಿತ್ತು. ನನ್ನ ಮುಖವು ನೆಲದ ಮೇಲೆ ಇತ್ತು. ಆಗ
ಗಬ್ರಿಯೇಲನು ನನ್ನನ್ನು ಮುಟ್ಟಿ ಎಬ್ಬಿಸಿ, 19“ನಾನು ನಿನಗೆ
ಈಗ ದರ್ಶನದ ಅರ್ಥವನ್ನು ವಿವರಿಸುತ್ತೇನೆ. ಭವಿಷ್ಯದಲ್ಲಿ
ನಡೆಯಲಿರುವುದನ್ನು ನಾನು ನಿನಗೆ ಹೇಳುತ್ತೇನೆ. ನಿನ್ನ
ದರ್ಶನವು ಪ್ರಳಯಕಾಲದ (ಅಂತ್ಯಕಾಲದ) ಬಗ್ಗೆ ಇತ್ತು.

20“ನೀನು ಎರಡು ಕೊಂಬುಗಳುಳ್ಳ ಒಂದು ಟಗರನ್ನು
ನೋಡಿದೆ. ಆ ಕೊಂಬುಗಳು ಮೇದ್ಯಯ ಮತ್ತು
ಪಾರಸಿಯ ರಾಜ್ಯಗಳು. 21ಆ ಹೋತವು ಗ್ರೀಕ್ ರಾಜ್ಯ.
ಅದರ ಎರಡು ಕಣ್ಣುಗಳ ಮಧ್ಯದ ಕೊಂಬು ಮೊದಲ
ನೆಯ ಅರಸ. 22ಆ ಕೊಂಬು ಮುರಿಯಿತು; ಅದರ
ಸ್ಥಳದಲ್ಲಿ ನಾಲ್ಕು ಕೊಂಬುಗಳು ಮೊಳೆತವು. ಆ ನಾಲ್ಕು
ಕೊಂಬುಗಳು ನಾಲ್ಕು ರಾಜ್ಯಗಳನ್ನು ಸೂಚಿಸುವವು. ಆ
ನಾಲ್ಕು ರಾಜ್ಯಗಳು ಮೊದಲನೆಯ ಅರಸನ ರಾಷ್ಟ್ರದಿಂದ
ಹುಟ್ಟುವವು. ಆದರೆ ಆ ನಾಲ್ಕು ರಾಜ್ಯಗಳು ಮೊದಲನೆಯ
ಅರಸನಷ್ಟು ಶಕ್ತಿಶಾಲಿಯಾಗಿರುವದಿಲ್ಲ.

23“ಆ ರಾಜ್ಯಗಳ ಅಂತ್ಯಕಾಲ ಸಮೀಪಿಸಿದಾಗ ಒಬ್ಬ
ಧೈರ್ಯಶಾಲಿಯಾದ ಮತ್ತು ಕ್ರೂರನಾದ ಅರಸನು ತಲೆ
ದೋರುವನು. ಈ ಅರಸನು ಬಹಳ ಕುತಂತ್ರಿಯಾಗಿರು
ವನು. ಅಧರ್ಮಿಗಳ ಮತ್ತು ಪಾಪಿಗಳ ಸಂಖ್ಯೆ ಹೆಚ್ಚಾದಾಗ
ಇದೆಲ್ಲ ನಡೆಯುವುದು. 24ಈ ಅರಸನು ಬಹಳ ಪ್ರಬಲ
ನಾಗಿರುವನು. ಆದರೆ ಆ ಪ್ರಾಬಲ್ಯ ಸ್ವಶಕ್ತಿಯಿಂದ ಬಂದು
ದಲ್ಲ. ಈ ಅರಸನು ಅಪಾರ ವಿನಾಶವನ್ನುಂಟು ಮಾಡು
ವನು. ಅವನು ಕೈಕೊಂಡ ಪ್ರತಿಯೊಂದು ಕೆಲಸದಲ್ಲಿ
ಅವನಿಗೆ ಜಯ ಲಭಿಸುವುದು. ಅವನು ಬಲಿಷ್ಠರನ್ನೂ
ದೇವಭಕ್ತರನ್ನೂ ನಾಶಮಾಡುವನು.

25“ಅರಸನು ಚತುರನೂ ಕುತಂತ್ರಿಯೂ ಆಗಿರುವನು.
ಅವನು ತನ್ನ ಬುದ್ಧಿಶಕ್ತಿಯನ್ನೂ ಹುಸಿನುಡಿಗಳನ್ನೂ ಬಳಸಿ
ಕೊಂಡು ಅಭಿವೃದ್ಧಿ ಹೊಂದುವನು. ತಾನು ಬಹಳ ಮುಖ್ಯ
ನೆಂದು ಅವನು ಭಾವಿಸುವನು. ನೆಮ್ಮದಿಯಾಗಿರುವ
ಅನೇಕ ಜನರನ್ನು ಅನಿರೀಕ್ಷಿತವಾಗಿ ನಾಶಮಾಡುವನು.
ಅವನು ರಾಜರುಗಳ ರಾಜನೊಂದಿಗೆ (ದೇವರೊಂದಿಗೆ)
ಸಹ ಹೋರಾಡುವ ಪ್ರಯತ್ನ ಮಾಡುವನು. ಆದರೆ ಆ
ಕ್ರೂರ ರಾಜನ ಶಕ್ತಿಯು ನಾಶವಾಗುವುದು. ಆದರೆ ಅದು
ಮನುಷ್ಯನ ಕೈಯಿಂದ ನಾಶವಾಗುವದಿಲ್ಲ.

26“ಆಗಿನಕಾಲದ ಮತ್ತು ಪರಿಸ್ಥಿತಿಯ ಬಗ್ಗೆ ಕಂಡ
ದರ್ಶನಗಳು ನಿಜವಾಗುವವು. ಆ ದರ್ಶನ ಗುಟ್ಟಾಗಿರಲಿ.
ಅದೆಲ್ಲ ನಡೆಯಬೇಕಾದರೆ ಇನ್ನೂ ಬಹಳ ಕಾಲ
ಬೇಕು.”ಎಂದು ಹೇಳಿದನು.

27ದಾನಿಯೇಲನೆಂಬ ನಾನು ಬಹಳ ಅಶಕ್ತನಾದೆನು.
ಆ ದರ್ಶನದ ತರುವಾಯ ಹಲವಾರು ದಿವಸ ನಾನು
ಕಾಯಿಲೆ ಬಿದ್ದೆನು. ಆಮೇಲೆ ನಾನು ಗುಣಹೊಂದಿ ರಾಜ
ಕಾರ್ಯವನ್ನು ಪ್ರಾರಂಭಿಸಿದೆನು. ಆದರೆ ಆ ಕನಸಿನಿಂದ
ನನ್ನ ಮನಸ್ಸು ಕಲಕಿತು. ಆ ಕನಸಿನ ಅರ್ಥವೇನೆಂಬುದು
ನನಗೆ ತಿಳಿಯಲಿಲ್ಲ.

### ದಾನಿಯೇಲನ ಪ್ರಾರ್ಥನೆ

9 ದಾರ್ಯಾವೆಷನ ಆಳ್ವಿಕೆಯ ಮೊದಲನೆಯ ವರ್ಷ
ದಂದು ನಡೆದ ಸಂಗತಿಗಳಿವು: ದಾರ್ಯಾವೆಷನು
ಅಹಷ್ವೇರೋಷನೆಂಬವನ ಮಗನು. ದಾರ್ಯಾವೆಷನು
ಮೇದ್ಯಯ ವಂಶದವನು. ಅವನು ಕಸ್ದೀಯ ರಾಜ್ಯದ
ದೊರೆಯಾದನು. 2ದಾರ್ಯಾವೆಷನ ಆಳ್ವಿಕೆಯ ಮೊದಲ
ನೆಯ ವರ್ಷ ದಾನಿಯೇಲನೆಂಬ ನಾನು ಕೆಲವು ಧರ್ಮ

ಗ್ರಂಥಗಳನ್ನು ಓದುತ್ತಲಿದ್ದೆ. ಎಪ್ಪತ್ತು ವರ್ಷಗಳ
ತರುವಾಯ ಜೆರುಸಲೇಮಿನ ಪುನರ್ನಿರ್ಮಾಣವಾಗುವ
ದೆಂದು ಯೆಹೋವನು ಯೆರೆಮೀಯನಿಗೆ ಹೇಳಿದ್ದು
ನನಗೆ ಈ ಧರ್ಮಗ್ರಂಥಗಳಿಂದ ತಿಳಿಯಿತು.

3 ಆಗ ನಾನು ದೇವರಾದ ನನ್ನ ಯೆಹೋವನನ್ನು
ಪ್ರಾರ್ಥಿಸಿದೆ ಮತ್ತು ಅವನ ಸಹಾಯವನ್ನು ಕೋರಿದೆ.
ನಾನು ಯಾವ ಆಹಾರವನ್ನೂ ಸ್ವೀಕರಿಸಲಿಲ್ಲ ಮತ್ತು
ದುಃಖಸೂಚಕವಾದ ವಸ್ತ್ರಗಳನ್ನು ಧರಿಸಿಕೊಂಡೆ. ನನ್ನ
ತಲೆಯ ಮೇಲೆ ಬೂದಿಯನ್ನು ಸುರಿದುಕೊಂಡೆ. 4 ನಾನು
ಯೆಹೋವನಾದ ನನ್ನ ದೇವರನ್ನು ಪ್ರಾರ್ಥಿಸಿದೆ. ನಾನು
ನನ್ನ ಎಲ್ಲ ಪಾಪಗಳ ಬಗ್ಗೆ ಆತನಿಗೆ ಹೇಳಿದೆ. ನಾನು
“ಯೆಹೋವನೇ, ನೀನು ಭಯಂಕರನಾಗಿರುವೆ. ನಿನ್ನನ್ನು
ಪ್ರೀತಿಸಿ ನಿನ್ನ ಆಜ್ಞೆಗಳನ್ನು ಅನುಸರಿಸುವವರಿಗೆ ಮಾಡಿದ
ಪ್ರೀತಿ ಮತ್ತು ಕರುಣೆಯ ವಾಗ್ದಾನಗಳನ್ನು ನೀನು
ನೆರವೇರಿಸುವೆ.

5 “ಆದರೆ ಯೆಹೋವನೇ, ನಾವು ಪಾಪ ಮಾಡಿದ್ದೇವೆ.
ನಾವು ತಪ್ಪುಗಳನ್ನು ಮಾಡಿದ್ದೇವೆ. ನಾವು ನಿನಗೆ ವಿರೋಧ
ವಾಗಿ ದಂಗೆ ಎದ್ದಿದ್ದೇವೆ. ನಾವು ನಿನ್ನ ಆಜ್ಞೆಗಳನ್ನು ಮತ್ತು
ಸರಿಯಾದ ನಿರ್ಣಯಗಳನ್ನು ತೊರೆದಿದ್ದೇವೆ. 6 ಪ್ರವಾದಿ
ಗಳು ಹೇಳಿದ್ದನ್ನು ನಾವು ಕೇಳಲಿಲ್ಲ. ಅವರು ನಿನ್ನ ಸೇವಕ
ರಾಗಿದ್ದರು, ಆ ಪ್ರವಾದಿಗಳು ನಿನ್ನ ಪರವಾಗಿ ಹೇಳಿದರು.
ಅವರು ನಮ್ಮ ರಾಜರುಗಳಿಗೆ, ನಮ್ಮ ನಾಯಕರುಗಳಿಗೆ
ಮತ್ತು ನಮ್ಮ ಹಿರಿಯರಿಗೆ ಹೇಳಿದರು. ಅವರು ಇಸ್ರೇಲಿನ
ಎಲ್ಲ ಜನರಿಗೆ ಹೇಳಿದರು. ಆದರೆ ನಾವು ಆ ಪ್ರವಾದಿಗಳ
ಮಾತಿಗೆ ಕಿವಿಗೊಡಲಿಲ್ಲ.

7 “ಯೆಹೋವನೇ, ನೀನು ಒಳ್ಳೆಯವನು, ಒಳ್ಳೆಯತನ
ನಿನ್ನ ಭಾಗವಾಗಿದೆ. ಆದರೆ ಈಗ ನಮ್ಮದು ನಾಚಿಕೆಪಡುವ
ಸ್ಥಿತಿಯಾಗಿದೆ. ಯೆಹೂದ ಮತ್ತು ಜೆರುಸಲೇಮಿನ ಜನರು
ನಾಚಿಕೆಪಡುವಂತಾಗಿದೆ. ಹತ್ತಿರದಲ್ಲಿದ್ದವರು ಹಾಗೂ
ದೂರದಲ್ಲಿದ್ದವರು, ಒಟ್ಟಿನಲ್ಲಿ ಇಸ್ರೇಲಿನ ಎಲ್ಲ ಜನರು
ನಾಚಿಕೆಪಡುವಂತಾಗಿದೆ. ಯೆಹೋವನೇ, ನೀನು ಆ
ಜನರನ್ನು ಎಲ್ಲಾ ದೇಶಗಳಲ್ಲಿ ಚದರಿಸಿ ಬಿಟ್ಟಿರುವೆ. ಆ
ಎಲ್ಲಾ ದೇಶಗಳಲ್ಲಿರುವ ಇಸ್ರೇಲರು ನಾಚಿಕೆ ಪಡ
ಬೇಕಾಗಿದೆ. ಯೆಹೋವನೇ, ನಿನ್ನ ವಿರುದ್ಧ ಮಾಡಿದ
ಎಲ್ಲಾ ಹೀನ ಕಾರ್ಯಗಳಿಗಾಗಿ ಅವರು ನಾಚಿಕೆ ಪಡ
ಬೇಕಾಗಿದೆ.

8 “ಯೆಹೋವನೇ, ನಾವೆಲ್ಲರೂ ನಾಚಿಕೆಪಡಬೇಕು.
ನಮ್ಮ ಎಲ್ಲ ರಾಜರು, ನಾಯಕರು ನಾಚಿಕೆ ಪಟ್ಟುಕೊಳ್ಳ
ಬೇಕು. ನಮ್ಮ ಹಿರಿಯರು ನಾಚಿಕೆಪಡಬೇಕು. ಏಕೆಂದರೆ
ನಾವು ನಿನ್ನ ವಿಷಯದಲ್ಲಿ ಪಾಪ ಮಾಡಿದ್ದೇವೆ.

9 “ಆದರೆ ಯೆಹೋವನೇ, ನೀನು ಕರುಣಾಳು, ದುಷ್ಟ
ಕಾರ್ಯಗಳನ್ನು ಮಾಡಿದ ಜನರನ್ನು ನೀನು ಕ್ಷಮಿಸುವೆ.
ನಾವು ನಿಜವಾಗಿಯೂ ನಿನಗೆ ತಿರುಗಿಬಿದ್ದೆವು. 10 ನಾವು
ನಮ್ಮ ದೇವರಾದ ಯೆಹೋವನ ಆಜ್ಞಾಪಾಲನೆ ಮಾಡಿಲ್ಲ.
ಯೆಹೋವನು ತನ್ನ ಸೇವಕರಾದ ಪ್ರವಾದಿಗಳ
ಮುಖಾಂತರ ನಮಗೆ ಕಟ್ಟಳೆಗಳನ್ನು ತಿಳಿಸಿದನು. ಆದರೆ
ನಾವು ಆ ಕಟ್ಟಳೆಗಳನ್ನು ಪಾಲಿಸಲಿಲ್ಲ. 11 ಇಸ್ರೇಲಿನ ಜನ
ರಲ್ಲಿ ಒಬ್ಬರೂ ಸಹ ನಿನ್ನ ಉಪದೇಶವನ್ನು ಪಾಲಿಸಲಿಲ್ಲ.
ಅವರೆಲ್ಲರೂ ಅದರಿಂದ ದೂರಾದರು. ಅವರು ನಿನ್ನ
ಆಜ್ಞೆಯನ್ನು ಪಾಲಿಸಲಿಲ್ಲ. ಮೋಶೆಯ ಧರ್ಮಶಾಸ್ತ್ರದಲ್ಲಿ
ಶಾಪಗಳ ಮತ್ತು ವಾಗ್ದಾನಗಳ ಬಗ್ಗೆ ಹೇಳಲಾಗಿದೆ.
(ಮೋಶೆಯು ದೇವರ ಸೇವಕನಾಗಿದ್ದನು.) ಆ ಶಾಪಗಳು
ಧರ್ಮಶಾಸ್ತ್ರವನ್ನು ಪಾಲಿಸದಿದ್ದವರಿಗೆ ಆಗುವ ಶಿಕ್ಷೆ
ಯಾಗಿದೆ. ಆ ಎಲ್ಲಾ ಶಿಕ್ಷೆಗಳು ನಮಗೆ ಆಗಿವೆ. ನಾವು
ಯೆಹೋವನಾದ ನಿನ್ನ ವಿರುದ್ಧ ಪಾಪ ಮಾಡಿದ್ದರಿಂದ
ನಮಗೆ ಹೀಗಾಯಿತು.

12 “ನಮಗೂ ನಮ್ಮ ನಾಯಕರುಗಳಿಗೂ ನೀನು ಹೇಳಿ
ದಂತೆಯೇ ಮಾಡಿರುವೆ. ನೀನು ನಮ್ಮ ಮೇಲೆ ದೊಡ್ಡ
ಕೇಡನ್ನು ಬರಮಾಡಿರುವೆ. ಜೆರುಸಲೇಮ್ ನಗರಕ್ಕೆ
ಉಂಟಾದಷ್ಟು ಕೇಡು ಭೂಮಂಡಲದಲ್ಲಿ ಮತ್ತಾವ
ನಗರಕ್ಕೂ ಆಗಿಲ್ಲ. 13 ಆ ಎಲ್ಲ ಕೇಡುಗಳು ನಮಗೆ ಉಂಟಾ
ದವು. ಇದೆಲ್ಲಾ ಮೋಶೆಯ ಧರ್ಮಶಾಸ್ತ್ರದಲ್ಲಿ ಹೇಳಿ
ದಂತೆಯೇ ನಡೆದುಹೋಯಿತು. ಆದರೆ ಈ ವರೆಗೂ
ನಾವು ನಿನ್ನ ಸಹಾಯವನ್ನು ಕೇಳಲಿಲ್ಲ. ಇಂದಿಗೂ ನಾವು
ಪಾಪಮಾಡುವದನ್ನು ನಿಲ್ಲಿಸಲಿಲ್ಲ. ಯೆಹೋವನೇ,
ಇನ್ನೂ ನಾವು ನಿನ್ನ ಸತ್ಯೋಪದೇಶದ ಕಡೆಗೆ ಗಮನ
ಕೊಡುತ್ತಿಲ್ಲ. 14 ಯೆಹೋವನಾದ ನೀನು ನಮಗೆ ಆಪತ್ತು
ಗಳನ್ನು ಸಿದ್ಧಪಡಿಸಿಟ್ಟಿದ್ದೆ. ಆ ಆಪತ್ತುಗಳು ನಮ್ಮ ಮೇಲೆ
ಬರುವಂತೆ ನೀನು ಮಾಡಿದೆ. ಯೆಹೋವನಾದ ನೀನು
ಎಲ್ಲವನ್ನು ನಿಷ್ಪಕ್ಷಪಾತವಾಗಿ ಮಾಡುವೆ. ಆದ್ದರಿಂದಲೇ
ಇದೆಲ್ಲವನ್ನು ಮಾಡಿದೆ. ಆದರೆ ಇಂದಿಗೂ ನಾವು ನಿನ್ನ
ಉಪದೇಶಕ್ಕೆ ಕಿವಿಗೊಟ್ಟಿಲ್ಲ.

15 “ನಮ್ಮ ದೇವರಾದ ಯೆಹೋವನೇ, ನೀನು ನಿನ್ನ ಶಕ್ತಿ
ಯಿಂದ ನಮ್ಮನ್ನು ಈಜಿಪ್ಟಿನಿಂದ ಹೊರಗೆ ತೆಗೆದು
ಕೊಂಡು ಬಂದೆ. ನಾವು ನಿನ್ನ ಜನರಾಗಿದ್ದೇವೆ. ನೀನು
ಕರುಣೆ ತೋರುವುದರಲ್ಲಿ ಇಂದಿಗೂ ಸುಪ್ರಸಿದ್ಧನಾಗಿ
ರುವೆ. ಯೆಹೋವನೇ, ನಾವು ಪಾಪ ಮಾಡಿದ್ದೇವೆ. ನಾವು
ಬಹಳ ಹೀನಕಾರ್ಯಗಳನ್ನು ಮಾಡಿದ್ದೇವೆ. 16 ಯೆಹೋ
ವನೇ, ಜೆರುಸಲೇಮಿನ ಮೇಲೆ ಕೋಪತಾಳುವದನ್ನು
ದಯವಿಟ್ಟು ನಿಲ್ಲಿಸು. ಜೆರುಸಲೇಮ್‌ನಗರವು ನಿನ್ನ
ಪವಿತ್ರವಾದ ಬೆಟ್ಟದ ಮೇಲೆ ಇದೆ. ನೀನು ಸರಿಯಾದು
ದನ್ನು ಮಾಡುವೆ. ಆದುದರಿಂದ ಜೆರುಸಲೇಮಿನ ಮೇಲೆ
ಕೋಪಗೊಳ್ಳುವದನ್ನು ದಯವಿಟ್ಟು ನಿಲ್ಲಿಸಿಬಿಡು. ನಮ್ಮ
ಸುತ್ತಮುತ್ತಲಿನ ಜನರೆಲ್ಲ ನಮ್ಮನ್ನು ನಿಂದಿಸುವರು ಮತ್ತು

ನಮ್ಮ ಜನರನ್ನು ಗೇಲಿಮಾಡುವರು. ನಾವು ಮತ್ತು ನಮ್ಮ
ಪೂರ್ವಿಕರು ನಿನಗೆ ಪಾಪಮಾಡಿದ್ದರಿಂದ ಇದೆಲ್ಲಾ
ಆಗುತ್ತಿದೆ.
17‘‘ಯೆಹೋವನೇ, ನನ್ನ ಪ್ರಾರ್ಥನೆಯನ್ನು ಕೇಳು.
ನಾನು ನಿನ್ನ ಸೇವಕ. ಸಹಾಯಕೋರಿ ಮಾಡುವ ನನ್ನ
ಪ್ರಾರ್ಥನೆಯನ್ನು ಲಾಲಿಸು. ನಿನ್ನ ಪವಿತ್ರ ಸ್ಥಳಕ್ಕಾಗಿ
ಒಳ್ಳೆಯದನ್ನು ಮಾಡು. ಆ ಕಟ್ಟಡವನ್ನು ನಾಶಮಾಡ
ಲಾಗಿದೆ. ಯೆಹೋವನೇ, ಈ ಒಳ್ಳೆಯ ಕಾರ್ಯಗಳನ್ನು
ನಿನ್ನ ಹಿತಕ್ಕಾಗಿ ಮಾಡು. 18ನನ್ನ ದೇವರೇ, ನನ್ನ ಪ್ರಾರ್ಥನೆ
ಯನ್ನು ಕೇಳು. ನಿನ್ನ ಕಣ್ಣುಗಳನ್ನು ತೆರೆದು ನಮಗಾದ
ಎಲ್ಲ ಕೇಡನ್ನು ನೋಡು. ನಿನ್ನ ಹೆಸರುಳ್ಳ ಪಟ್ಟಣದ ಗತಿ
ಏನಾಗಿದೆ ನೋಡು. ನಾವು ಒಳ್ಳೆಯ ಜನರೆಂದು ನಾನು
ಹೇಳುತ್ತಿಲ್ಲ. ನಾವು ಒಳ್ಳೆಯ ಜನರೆಂದು ಇದೆಲ್ಲವನ್ನು
ಕೇಳುತ್ತಿಲ್ಲ. ನೀನು ಕರುಣಾಮಯನಾಗಿರುವುದ
ರಿಂದಲೇ ಇದನ್ನೆಲ್ಲ ಕೇಳುತ್ತಿದ್ದೇನೆ. 19ಯೆಹೋವನೇ,
ನನ್ನ ಮೊರೆಯನ್ನು ಕೇಳು. ಯೆಹೋವನೇ, ನಮ್ಮನ್ನು
ಕ್ಷಮಿಸು. ಯೆಹೋವನೇ, ನಮ್ಮ ಕಡೆಗೆ ಗಮನ ನೀಡಿ
ಸಹಾಯಮಾಡು, ತಡಮಾಡಬೇಡ. ಈಗಲೇ ಸಹಾಯ
ಮಾಡು. ನಿನ್ನ ಮಹಿಮೆಗಾಗಿಯೇ ಸಹಾಯಮಾಡು.
ದೇವರೇ, ನಿನ್ನ ಹೆಸರಿನಿಂದ ಕರೆಯಲ್ಪಡುವ ನಿನ್ನ ನಗರ
ಕ್ಕಾಗಿಯೂ ನಿನ್ನ ಜನರಿಗಾಗಿಯೂ ಈಗಲೇ ಸಹಾಯ
ಮಾಡು.’’

## ಎಪ್ಪತ್ತು ವಾರಗಳ ಬಗ್ಗೆ ದರ್ಶನ

20ನಾನು ಪ್ರಾರ್ಥನೆಯಲ್ಲಿ ನನ್ನ ಪಾಪಗಳ ಬಗ್ಗೆ ಮತ್ತು
ಇಸ್ರೇಲರ ಪಾಪಗಳ ಬಗ್ಗೆ ಹೇಳಿಕೊಂಡೆ. ನಾನು ದೇವರ
ಪವಿತ್ರಪರ್ವತಕ್ಕಾಗಿ ಪ್ರಾರ್ಥನೆ ಮಾಡುತ್ತಿದ್ದೆ. 21ನಾನು
ಪ್ರಾರ್ಥಿಸುತ್ತಿದ್ದಾಗ ಗಬ್ರಿಯೇಲನೆಂಬ ಪುರುಷನು
ನನ್ನಲ್ಲಿಗೆ ಬಂದನು. ಗಬ್ರಿಯೇಲನನ್ನೇ ನಾನು ದರ್ಶನ
ದಲ್ಲಿ ಕಂಡಿದ್ದೆನು. ಗಬ್ರಿಯೇಲನು ವೇಗವಾಗಿ ಹಾರುತ್ತಾ
ಸಾಯಂಕಾಲದ ನೈವೇದ್ಯದ ಸಮಯದಲ್ಲಿ ನನ್ನ ಬಳಿಗೆ
ಬಂದನು.
22ನಾನು ತಿಳಿದುಕೊಳ್ಳಬಯಸಿದ ವಿಷಯಗಳನ್ನು
ತಿಳಿದುಕೊಳ್ಳಲು ಗಬ್ರಿಯೇಲನು ನನಗೆ ಸಹಾಯ ಮಾಡಿ
ದನು. ಗಬ್ರಿಯೇಲನು, ‘‘ದಾನಿಯೇಲನೇ, ನಾನು ನಿನಗೆ
ಜ್ಞಾನವನ್ನು ಕೊಡಲು ಮತ್ತು ಅರ್ಥ ಮಾಡಿಕೊಳ್ಳಲು
ನಿನಗೆ ಸಹಾಯಮಾಡಲು ಬಂದಿದ್ದೇನೆ. 23ನೀನು
ಪ್ರಾರ್ಥಿಸಲು ಪ್ರಾರಂಭಿಸಿದಾಗಲೇ ನನಗೆ ದೇವರ ಆಜ್ಞೆ
ಯಾಯಿತು. ನಾನು ಅದನ್ನು ನಿನಗೆ ತಿಳಿಸಲು ಬಂದಿರು
ವೆನು. ದೇವರು ನಿನ್ನನ್ನು ತುಂಬ ಪ್ರೀತಿಸುತ್ತಾನೆ. ನೀನು
ದೈವಾಜ್ಞೆಯನ್ನು ಅರಿತುಕೊಳ್ಳುವೆ ಮತ್ತು ದರ್ಶನದ
ಅರ್ಥವನ್ನು ತಿಳಿದುಕೊಳ್ಳುವೆ.
24‘‘ದಾನಿಯೇಲನೇ, ನಿಮ್ಮ ಜನರಿಗೆ ಮತ್ತು ನಿಮ್ಮ
ಪವಿತ್ರನಗರಕ್ಕೆ ಯೆಹೋವನು ಎಪ್ಪತ್ತು ವಾರಗಳ ಅವಧಿ
ಯನ್ನು ಗೊತ್ತುಮಾಡಿದ್ದಾನೆ. ಅಧರ್ಮವನ್ನು ಕೊನೆಗಾಣಿ
ಸುವದು, ಪಾಪಗಳನ್ನು ತಡೆಯುವುದು, ಅಪರಾಧಗಳನ್ನು
ನಿವಾರಿಸುವುದು, ಜನರನ್ನು ಪರಿಶುದ್ಧಗೊಳಿಸುವುದು,
ಎಂದೆಂದಿಗೂ ಉಳಿಯುವ ಧರ್ಮವನ್ನು ಸ್ಥಾಪಿಸುವುದು,
ದರ್ಶನಗಳಿಗೆ ಮತ್ತು ಪ್ರವಾದಿಯ ನುಡಿಗಳಿಗೆ ಮುದ್ರೆ
ಹಾಕಿ ಕಾರ್ಯರೂಪಕ್ಕೆ ತರುವುದು, ಪವಿತ್ರ ಸ್ಥಳವನ್ನು
ಪ್ರತಿಷ್ಠಿಸುವುದು,ಇವೆಲ್ಲವುಗಳಿಗಾಗಿ ಈ ಎಪ್ಪತ್ತು ವಾರಗಳ
ಅವಧಿಯನ್ನು ಗೊತ್ತುಮಾಡಲಾಗಿದೆ.
25‘‘ದಾನಿಯೇಲನೇ, ಇದನ್ನು ತಿಳಿದುಕೊ. ಇದನ್ನು
ಚೆನ್ನಾಗಿ ಅರ್ಥಮಾಡಿಕೊ. ‘ಹೋಗಿ ಜೆರುಸಲೇಮನ್ನು
ಸರಿಪಡಿಸಿರಿ’ ಎಂಬ ದೈವೋಕ್ತಿಯು ಹೊರಡುವಂದಿ
ನಿಂದ ಅಭಿಷಿಕ್ತನಾದ ಯೆಹೋವನು ಬರುವದರೊಳಗೆ
ಏಳು ವಾರಗಳು ಕಳೆಯಬೇಕು. ಆಗ ಜೆರುಸಲೇಮು ಮತ್ತೆ
ನಿರ್ಮಾಣವಾಗುವುದು. ಜನರು ಒಂದಾಗಿ ಸೇರುವದಕ್ಕೆ
ಜೆರುಸಲೇಮಿನಲ್ಲಿ ಮತ್ತೆ ಸ್ಥಳಾವಕಾಶವಾಗುವುದು.
ನಗರದ ಸುತ್ತಲೂ ಅದನ್ನು ರಕ್ಷಿಸುವುದಕ್ಕಾಗಿ ಒಂದು
ಕಂದಕವನ್ನು ಕೊರೆಯಲಾಗುವುದು. ಅರವತ್ತೆರಡು
ವಾರಗಳವರೆಗೆ ಜೆರುಸಲೇಮ್ ನಗರವನ್ನು ಕಟ್ಟ
ಲಾಗುವುದು. ಆದರೆ ಆ ಅವಧಿಯಲ್ಲಿ ಹಲವಾರು ಕಷ್ಟ
ನಷ್ಟಗಳು ಸಂಭವಿಸುವವು. 26ಅರವತ್ತೆರಡು ವಾರಗಳ
ತರುವಾಯ ಅಭಿಷಿಕ್ತನ ಕೊಲೆಯಾಗುವುದು. ಅವನು
ಇಲ್ಲವಾಗುವನು. ಭವಿಷ್ಯತ್ತಿನ ನಾಯಕನ ಜನರು
ನಗರವನ್ನೂ ಪವಿತ್ರಾಲಯವನ್ನೂ ಹಾಳುಮಾಡುವರು.
ಆ ಅಂತ್ಯವು ಒಂದು ಪ್ರವಾಹದಂತೆ ಬರುವುದು. ಕೊನೆ
ಯವರೆಗೂ ಯುದ್ಧ ನಡೆಯುವುದು. ಆ ಸ್ಥಳವನ್ನು
ಸಂಪೂರ್ಣವಾಗಿ ನಾಶಮಾಡಬೇಕೆಂದು ದೇವರು
ಆಜ್ಞಾಪಿಸಿದ್ದಾನೆ.
27‘‘ಆಗ ಭವಿಷ್ಯತ್ತಿನ ನಾಯಕನು ಬಹುಜನರೊಂದಿಗೆ
ಒಂದು ಒಡಂಬಡಿಕೆಯನ್ನು ಮಾಡಿಕೊಳ್ಳುವನು. ಆ
ಒಡಂಬಡಿಕೆ ಒಂದು ವಾರದವರೆಗೆ ಮುಂದುವರೆಯು
ವದು, ಅರ್ಧವಾರದವರೆಗೆ ಯಜ್ಞ ಮತ್ತು ನೈವೇದ್ಯಗಳನ್ನು
ನಿಲ್ಲಿಸಲಾಗುವುದು. ಒಬ್ಬ ಘಾತುಕನು ಬರುವನು.
ಅವನು ಬಹುವಿನಾಶಕಾರಿ ಕೆಲಸಗಳನ್ನು ಮಾಡುವನು.
ಆದರೆ ಆ ಘಾತುಕನನ್ನು ಮುಗಿಸಿಬಿಡಬೇಕೆಂದು ದೇವರ
ಆಜ್ಞೆಯಾಗಿದೆ’’ ಎಂದು ಹೇಳಿದನು.

## ಟೈಗ್ರಿಸ್ ನದಿಯ ದಡದಲ್ಲಿ ದಾನಿಯೇಲನ ದರ್ಶನ

10 ಕೋರೆಷನು ಪಾರಸಿಯ ರಾಜನಾಗಿದ್ದನು.
ಕೋರೆಷನ ಆಳ್ವಿಕೆಯ ಮೂರನೆಯ ವರ್ಷದಲ್ಲಿ
ದಾನಿಯೇಲನಿಗೆ ಒಂದು ಸಂಗತಿಯು ಪ್ರಕಟವಾಯಿತು.

(ದಾನಿಯೇಲನ ಇನ್ನೊಂದು ಹೆಸರು ಬೇಲ್ತೆಶಚ್ಚರ.) ಈ
ಸಂಗತಿ ಸತ್ಯವಾದುದು; ಆದರೆ ತಿಳಿದುಕೊಳ್ಳಲು ಬಹಳ
ಕಷ್ಟಕರವಾಗಿತ್ತು. ದಾನಿಯೇಲನು ಈ ಸಂಗತಿಯನ್ನು
ತಿಳಿದುಕೊಂಡನು. ಒಂದು ದರ್ಶನದಲ್ಲಿ ಅದರ ಬಗ್ಗೆ
ಅವನಿಗೆ ವಿವರಿಸಲಾಯಿತು.

2 ದಾನಿಯೇಲನು ಹೇಳುವುದೇನೆಂದರೆ: ‘‘ಆ ಸಮಯ
ದಲ್ಲಿ ದಾನಿಯೇಲನೆಂಬ ನಾನು ಮೂರು ವಾರ ಶೋಕ
ದಲ್ಲಿದ್ದೆನು. 3 ಆ ಮೂರು ವಾರಗಳಲ್ಲಿ ನಾನು ಇಷ್ಟಪಡು
ತ್ತಿದ್ದ ಆಹಾರವನ್ನು ತಿನ್ನಲಿಲ್ಲ; ಮಾಂಸಾಹಾರವನ್ನು ಸೇವಿಸ
ಲಿಲ್ಲ; ದ್ರಾಕ್ಷಾರಸವನ್ನು ಕುಡಿಯಲಿಲ್ಲ; ತಲೆಗೆ ಎಣ್ಣೆ
ಯನ್ನು ಹಾಕಿಕೊಳ್ಳಲಿಲ್ಲ. ಮೂರು ವಾರಗಳವರೆಗೆ
ಇದೆಲ್ಲವನ್ನು ನಾನು ನಿಲ್ಲಿಸಿಬಿಟ್ಟೆ.

4 ‘‘ವರುಷದ ಮೊದಲನೆ ತಿಂಗಳ ಇಪ್ಪತ್ನಾಲ್ಕನೆಯ ದಿನ
ದಲ್ಲಿ ನಾನು ಟೈಗ್ರಿಸ್ ಮಹಾನದಿಯ ದಡದಲ್ಲಿ ನಿಂತು
ಕೊಂಡಿದ್ದೆ. 5 ಅಲ್ಲಿ ನಿಂತುಕೊಂಡಿದ್ದಾಗ ನಾನು ಮುಖ
ವೆತ್ತಿ ನೋಡಿದೆ. ನನ್ನ ಎದುರಿಗೆ ಒಬ್ಬ ವ್ಯಕ್ತಿಯು ನಿಂತಿ
ದ್ದನ್ನು ಕಂಡೆ. ಅವನು ನಾರುಬಟ್ಟೆಯನ್ನು ಧರಿಸಿ
ಕೊಂಡಿದ್ದನು. ಅವನು ಊಫಜಿನ ಅಪರಂಜಿಯ ಪಟ್ಟಿ
ಯನ್ನು ಸೊಂಟಕ್ಕೆ ಬಿಗಿದುಕೊಂಡಿದ್ದನು. 6 ಅವನ
ಶರೀರವು ಪ್ರಕಾಶಮಾನವಾದ ವಜ್ರದಂತೆ ಇತ್ತು. ಅವನ
ಮುಖವು ಕೋಲ್ಮಿಂಚಿನಂತೆ ಹೊಳೆಯುತ್ತಿತ್ತು. ಅವನ
ಕಣ್ಣುಗಳು ಬೆಂಕಿಯ ಪಂಜುಗಳಂತಿದ್ದವು. ಅವನ
ಕೈಕಾಲುಗಳು ಉಜ್ಜಿದ ಹಿತ್ತಾಳೆಯಂತೆ ಝಗಝಗಿಸುತ್ತಿ
ದ್ದವು. ಅವನ ಧ್ವನಿಯು ಜನಜಂಗುಳಿಯ ಧ್ವನಿಯಂತೆ
ದೊಡ್ಡದಾಗಿತ್ತು.

7 ‘‘ದಾನಿಯೇಲನೆಂಬ ನನಗೆ ಮಾತ್ರ ಆ ದರ್ಶನ
ವಾಯಿತು. ನನ್ನ ಜೊತೆಯಲ್ಲಿದ್ದವರಿಗೆ ಆ ದರ್ಶನ
ಕಾಣಿಸಲಿಲ್ಲವಾದರೂ ಅವರು ಭಯಪಟ್ಟರು. ಅವರು
ಭಯದಿಂದ ಓಡಿಹೋಗಿ ಅಡಗಿಕೊಂಡರು. 8 ನಾನೊ
ಬ್ಬನೇ ಅಲ್ಲಿದ್ದೆ. ನಾನು ಆ ದರ್ಶನವನ್ನು ನೋಡುತ್ತಲೇ
ಇದ್ದೆ. ಅದರಿಂದ ನನಗೆ ಭಯವಾಯಿತು. ನಾನು
ದುರ್ಬಲನಾದೆ. ನನ್ನ ಮುಖವು ಸತ್ತವರ ಮುಖದಂತೆ
ಬಿಳುಪೇರಿತು; ನಾನು ನಿಸ್ಸಹಾಯಕನಾದೆ.

9 ದರ್ಶನದಲ್ಲಿ ಕಾಣಿಸಿಕೊಂಡ ಮನುಷ್ಯನು ಮಾತ
ನಾಡುವದನ್ನು ನಾನು ಕೇಳಿದೆ. ಅವನ ಧ್ವನಿಯನ್ನು ಕೇಳಿದ
ಕೂಡಲೇ ನಾನು ಬೋರಲು ಬಿದ್ದು ಗಾಢವಾದ
ನಿದ್ರೆಯಲ್ಲಿ ಮುಳುಗಿದೆ.

10 ‘‘ಆಗ ಒಂದು ಕೈ ನನ್ನನ್ನು ಮುಟ್ಟಿತು. ನಾನು ಮೊಣ
ಕಾಲುಗಳನ್ನು ಮತ್ತು ಅಂಗೈಗಳನ್ನು ನೆಲಕ್ಕೆ ಊರಿ, ಬಾಗಿ
ನಿಂತುಕೊಂಡೆ. ನಾನು ಭಯದಿಂದ ನಡುಗುತ್ತಿದ್ದೆ.
11 ದರ್ಶನದಲ್ಲಿ ಕಾಣಿಸಿಕೊಂಡ ಮನುಷ್ಯನು ನನಗೆ,
‘ದಾನಿಯೇಲನೇ, ದೇವರು ನಿನ್ನನ್ನು ತುಂಬ ಪ್ರೀತಿಸು
ತ್ತಾನೆ. ನಾನು ನಿನಗೆ ಈ ಮುಂದೆ ಹೇಳುವ ಮಾತುಗಳ
ಬಗ್ಗೆ ಚೆನ್ನಾಗಿ ವಿಚಾರಮಾಡು. ಎದ್ದು ನಿಲ್ಲು, ನನ್ನನ್ನು
ನಿನ್ನ ಬಳಿಗೆ ಕಳುಹಿಸಲಾಗಿದೆ’ ಎಂದು ಹೇಳಿದನು. ಆಗ
ನಾನು ಎದ್ದುನಿಂತೆ. ನಾನು ಭಯದಿಂದ ಇನ್ನೂ ನಡು
ಗುತ್ತಿದ್ದೆ. 12 ಆಮೇಲೆ ದರ್ಶನದಲ್ಲಿನ ಆ ಮನುಷ್ಯನು
ಪುನಃ ಮಾತನಾಡಲು ಪ್ರಾರಂಭಿಸಿದನು. ಅವನು,
‘‘ದಾನಿಯೇಲನೇ, ಭಯಪಡಬೇಡ. ನೀನು ಜ್ಞಾನ
ಸಂಪಾದನೆ ಮಾಡಬೇಕೆಂದೂ ದೇವರೆದುರಿಗೆ ಭಕ್ತಿ
ವಿನಯಗಳಿಂದ ವರ್ತಿಸ ಬೇಕೆಂದೂ ತೀರ್ಮಾನಿಸಿದ
ಮೊದಲ ದಿನದಿಂದಲೇ ಆತನು ನಿನ್ನ ಪ್ರಾರ್ಥನೆಗಳನ್ನು
ಆಲಿಸುತ್ತಿದ್ದಾನೆ. ನೀನು ಪ್ರಾರ್ಥನೆ ಮಾಡಿದ್ದರಿಂದಲೇ
ನಾನು ಇಲ್ಲಿಗೆ ಬಂದೆನು. 13 ಆದರೆ ಪಾರಸಿಯ ರಾಜ್ಯದ
ದಿವ್ಯಪಾಲಕನು ನನ್ನೊಂದಿಗೆ ಕಳೆದ ಇಪ್ಪತ್ತೊಂದು ದಿನಗ
ಳಿಂದ ಹೋರಾಡುತ್ತಿದ್ದನು; ನನಗೆ ತೊಂದರೆ ಕೊಡು
ತ್ತಿದ್ದನು. ಆಗ ಪ್ರಧಾನ ದಿವ್ಯಪಾಲಕರಲ್ಲೊಬ್ಬನಾದ
ಮಿಕಾಯೇಲನು ನನ್ನ ಸಹಾಯಕ್ಕೆ ಬಂದನು. ನಾನು ಅಲ್ಲಿ
ಪಾರಸಿಯ ರಾಜನ ಹತ್ತಿರ ಸಿಕ್ಕಿಹಾಕಿಕೊಂಡಿದ್ದೆ.
14 ದಾನಿಯೇಲನೇ, ಭವಿಷ್ಯದಲ್ಲಿ ನಿನ್ನ ಜನರಿಗೆ ಏನಾಗುವ
ದೆಂಬುದನ್ನು ನಿನಗೆ ವಿವರಿಸಲು ನಾನು ಈಗ ಇಲ್ಲಿಗೆ
ಬಂದೆನು. ಈ ಕನಸು ಭವಿಷ್ಯದ ಒಂದು ಕಾಲದ ಕುರಿ
ತಾಗಿದೆ’ ಎಂದು ಹೇಳಿದನು.

15 ‘‘ಆ ಪುರುಷನು ನನ್ನೊಂದಿಗೆ ಮಾತನಾಡುತ್ತಿದ್ದಾಗ
ನಾನು ನೆಲವನ್ನು ನೋಡುತ್ತಾ ಬಾಗಿಕೊಂಡಿದ್ದೆ. ಮಾತ
ನಾಡಲು ನನ್ನಿಂದ ಸಾಧ್ಯವಾಗಲಿಲ್ಲ. 16 ಆಗ ಮನುಷ್ಯ
ಕುಮಾರನಂತಿರುವವನು ನನ್ನ ತುಟಿಗಳನ್ನು ಸ್ಪರ್ಶ
ಮಾಡಿದನು. ನಾನು ಬಾಯಿತೆರೆದು ಮಾತನಾಡಲು
ಪ್ರಾರಂಭಿಸಿದೆ. ನನ್ನ ಎದುರಿಗೆ ನಿಂತುಕೊಂಡಿದ್ದವನಿಗೆ
‘ಸ್ವಾಮಿ, ದರ್ಶನದಲ್ಲಿ ನೋಡಿದ ಸಂಗತಿಗಳಿಂದ ನಾನು
ಚಿಂತಾಕ್ರಾಂತನಾಗಿದ್ದೇನೆ; ಅಂಜಿಕೊಂಡಿದ್ದೇನೆ; ನಿಸ್ಸಹಾ
ಯಕನಾಗಿದ್ದೇನೆ. 17 ಸ್ವಾಮೀ, ನಾನು ದಾನಿಯೇಲ.
ನಾನು ನಿಮ್ಮ ಸೇವಕ. ನಾನು ನಿಮ್ಮ ಸಂಗಡ ಹೇಗೆ ಮಾತ
ನಾಡಲಿ. ನನಗೆ ಶಕ್ತಿಯೇ ಇಲ್ಲದಂತಾಗಿದೆ, ಉಸಿರಾಡು
ವುದೂ ಕಷ್ಟವಾಗಿದೆ’ ಎಂದೆ.

18 ‘‘ಆ ಮನುಷ್ಯಕುಮಾರನಂತಿರುವವನು ಪುನಃ
ನನ್ನನ್ನು ಸ್ಪರ್ಶಿಸಿದನು. ಆತನು ನನ್ನನ್ನು ಸ್ಪರ್ಶಿಸಿದಾಗ
ನನಗೆ ಉಪಶಮನವಾಯಿತು.

19 ಆಗ ಆತನು ‘ದಾನಿಯೇಲನೇ, ಭಯಪಡಬೇಡ.
ದೇವರು ನಿನ್ನನ್ನು ತುಂಬ ಪ್ರೀತಿಸುತ್ತಾನೆ. ಸಮಾಧಾನ
ತಂದುಕೊ. ಈಗ ನೀನು ಬಲಗೊಳ್ಳು, ಬಲಗೊಳ್ಳು’
ಎಂದು ಹೇಳಿದನು.

‘‘ಅವನು ನನ್ನೊಂದಿಗೆ ಮಾತನಾಡಿದ ಮೇಲೆ ನನಗೆ
ಬಲ ಬಂದಿತು. ಆಗ ನಾನು, ‘ಸ್ವಾಮೀ, ನೀವು ನನಗೆ

ಬಲವನ್ನು ನೀಡಿದಿರಿ. ಈಗ ನೀವು ಮಾತನಾಡಬಹುದು’ ಎಂದು ಹೇಳಿದೆ.

[20]‘‘ಆಗ ಅವನು, ‘ದಾನಿಯೇಲನೇ, ನಾನು ಏಕೆ ಬಂದಿದ್ದೇನೆಂಬುದು ನಿನಗೆ ಗೊತ್ತಿಲ್ಲವೇ? ತಕ್ಷಣ ನಾನು ಪಾರಸಿಯ ರಾಜ್ಯದ ದಿವ್ಯಪಾಲಕನೊಂದಿಗೆ ಹೋರಾಡಲು ಹಿಂದಿರುಗಬೇಕು. ನಾನು ಹೋದ ಮೇಲೆ ಗ್ರೀಕ್ ರಾಜ್ಯದ ದಿವ್ಯಪಾಲಕನು ಬರುವನು. [21]ದಾನಿಯೇಲನೇ, ನಾನು ಹೋಗುವ ಮುಂಚೆ ‘ಸತ್ಯಶಾಸನ’ದಲ್ಲಿ ಏನು ಬರೆದಿದೆ ಎಂಬುದನ್ನು ನಿನಗೆ ಹೇಳುವೆನು. ಆ ದುಷ್ಟ ದೂತರೊಂದಿಗೆ ಹೋರಾಡುವಲ್ಲಿ ಮಿಕಾಯೇಲನ ಹೊರತು ನನಗೆ ಬೆಂಬಲವಾಗತಕ್ಕವರು ಇನ್ನಾರೂ ಇಲ್ಲ. ಮಿಕಾಯೇಲನು ನಿಮ್ಮ ಜನರ ಪಾಲಕನಾಗಿದ್ದಾನೆ.

11 ಮೇದ್ಯಯನಾದ ದಾರ್ಯಾವೆಷನ ಆಳ್ವಿಕೆಯ ಮೊದಲನೆಯ ವರ್ಷದಲ್ಲಿ ಪಾರಸಿಯ ರಾಜ್ಯದ ದಿವ್ಯಪಾಲಕನ ವಿರುದ್ಧದ ಹೋರಾಟದಲ್ಲಿ ನಾನು ಮಿಕಾಯೇಲನಿಗೆ ಬೆಂಬಲ ಕೊಟ್ಟೆನು.

[2]‘‘‘ದಾನಿಯೇಲನೇ, ಈಗ ನಾನು ನಿನಗೆ ಸತ್ಯಾಂಶವನ್ನು ಹೇಳುತ್ತೇನೆ ಕೇಳು. ಪಾರಸಿಯ ದೇಶದಲ್ಲಿ ಇನ್ನೂ ಮೂರು ಜನ ಅರಸರು ಆಳುವರು. ಆಮೇಲೆ ನಾಲ್ಕನೆಯ ರಾಜನು ಬರುವನು. ನಾಲ್ಕನೆಯ ರಾಜನು ತನಗಿಂತ ಮುಂಚೆ ಆಗಿ ಹೋದ ಪಾರಸಿಯ ದೇಶದ ಎಲ್ಲ ಅರಸರಿಗಿಂತ ಅಧಿಕ ಧನವಂತನಾಗಿರುವನು. ಆ ನಾಲ್ಕನೆಯ ರಾಜನು ತನ್ನ ಪ್ರಾಬಲ್ಯವನ್ನು ಬೆಳೆಸಿಕೊಳ್ಳುವದಕ್ಕೆ ಧನವನ್ನು ಬಳಸಿಕೊಳ್ಳುವನು. ಎಲ್ಲರೂ ಗ್ರೀಸ್ ರಾಜ್ಯದ ವಿರುದ್ಧವಾಗುವಂತೆ ಮಾಡುವನು. [3]ಆಮೇಲೆ ಒಬ್ಬ ಅತಿ ಪರಾಕ್ರಮಶಾಲಿಯಾದ ಮತ್ತು ಪ್ರಭಾವಶಾಲಿಯಾದ ಅರಸನು ಬರುವನು. ಅವನು ಹೆಚ್ಚಿನ ಸಾಮರ್ಥ್ಯದಿಂದ ಆಳುವನು. ಅವನು ತನ್ನ ಮನಸ್ಸಿಗೆ ಬಂದಂತೆ ಮಾಡುವನು. [4]ಆ ರಾಜನು ಬಂದ ಮೇಲೆ ಅವನ ರಾಜ್ಯವು ಒಡೆಯುವದು. ಅವನ ರಾಜ್ಯವು ನಾಲ್ಕು ಹೋಳಾಗಿ ಜಗತ್ತಿನ ನಾಲ್ಕು ದಿಕ್ಕುಗಳಲ್ಲಿ ಹಂಚಿ ಹೋಗುವುದು. ಅವನ ರಾಜ್ಯವು ಅವನ ಮಕ್ಕಳಲ್ಲಿ ಅಥವಾ ಮೊಮ್ಮಕ್ಕಳಲ್ಲಿ ಹಂಚಲ್ಪಡುವದಿಲ್ಲ. ಅವನ ರಾಜ್ಯಕ್ಕೆ ಅವನು ಮೊದಲು ಹೊಂದಿದ್ದ ಅಧಿಕಾರವು ಇರುವದಿಲ್ಲ. ಏಕೆಂದರೆ ಅವನ ರಾಜ್ಯವನ್ನು ಅವನಿಂದ ಕಸಿದುಕೊಂಡು ಬೇರೆ ಜನರಿಗೆ ಕೊಡಲಾಗುವುದು.

[5]‘‘‘ದಕ್ಷಿಣ ದಿಕ್ಕಿನ ರಾಜನು ಪ್ರಬಲನಾಗುವನು. ಆದರೆ ಆಗ ಅವನ ಒಬ್ಬ ಸೇನಾಧಿಪತಿಯು ದಕ್ಷಿಣದಿಕ್ಕಿನ ಅರಸನನ್ನು ಸೋಲಿಸುವನು. ಆ ಸೇನಾಧಿಪತಿಯು ಆಳಲು ಪ್ರಾರಂಭಿಸುವನು; ಅವನು ಬಹಳ ಪ್ರಭಾವಶಾಲಿಯಾಗುವನು. [6]ಕೆಲವು ವರ್ಷಗಳಾದ ಮೇಲೆ ದಕ್ಷಿಣ ದಿಕ್ಕಿನ ರಾಜನು ಮತ್ತು ಆ ಸೇನಾಧಿಪತಿಯು ಒಂದು ಒಪ್ಪಂದ ವನ್ನು ಮಾಡಿಕೊಳ್ಳುವರು. ದಕ್ಷಿಣದ ರಾಜನ ಮಗಳು ಉತ್ತರದ ರಾಜನನ್ನು ಮದುವೆಯಾಗುವಳು. ಶಾಂತಿಯನ್ನು ಸ್ಥಾಪಿಸುವದಕ್ಕಾಗಿ ಅವಳು ಹೀಗೆ ಮಾಡುವಳು. ಆದರೆ ಅವಳು ಮತ್ತು ದಕ್ಷಿಣದ ರಾಜನು ಸಾಕಷ್ಟು ಶಕ್ತಿ ಶಾಲಿಗಳಾಗಿರುವುದಿಲ್ಲ. ಜನರು ಅವಳನ್ನೂ ಮತ್ತು ಆ ದೇಶಕ್ಕೆ ಅವಳನ್ನು ಕರೆದುಕೊಂಡು ಹೋದ ವ್ಯಕ್ತಿಯನ್ನೂ ವಿರೋಧ ಮಾಡುವರು. ಆ ಜನರು ಅವಳ ಮಗು ಮತ್ತು ಅವಳ ಸಹಾಯಕನನ್ನು ವಿರೋಧಿಸುವರು.

[7]‘‘‘ಆದರೆ ಅವಳ ಕುಟುಂಬದ ಒಬ್ಬ ವ್ಯಕ್ತಿಯು ದಕ್ಷಿಣದ ರಾಜನ ಸ್ಥಳವನ್ನು ತೆಗೆದುಕೊಳ್ಳಲು ಬರುವನು. ಅವನು ಉತ್ತರದ ರಾಜನ ಸೈನ್ಯದ ಮೇಲೆ ಧಾಳಿ ಮಾಡುವನು. ಅವನು ಆ ಅರಸನ ಭದ್ರವಾದ ಕೋಟೆಗೆ ನುಗ್ಗುವನು. ಅವನು ಯುದ್ಧಮಾಡಿ ಗೆಲ್ಲುವನು. [8]ಅವನು ಅವರ ವಿಗ್ರಹಗಳನ್ನು ತೆಗೆದುಕೊಳ್ಳುವನು. ಅವನು ಅವರ ಲೋಹದ ಪ್ರತಿಮೆಗಳನ್ನು ಮತ್ತು ಅವುಗಳ ಬೆಲೆಬಾಳುವ ಬೆಳ್ಳಿ ಮತ್ತು ಬಂಗಾರದ ವಸ್ತುಗಳನ್ನು ತೆಗೆದುಕೊಳ್ಳುವನು. ಆ ವಸ್ತುಗಳನ್ನೆಲ್ಲಾ ಈಜಿಪ್ಟಿಗೆ ತೆಗೆದುಕೊಂಡು ಹೋಗುವನು. ಆಮೇಲೆ ಕೆಲವು ವರ್ಷಗಳವರೆಗೆ ಅವನು ಉತ್ತರದ ರಾಜನಿಗೆ ಕಿರುಕುಳ ಕೊಡುವದಿಲ್ಲ. [9]ಉತ್ತರದ ರಾಜನು ದಕ್ಷಿಣ ರಾಜ್ಯದ ಮೇಲೆ ಧಾಳಿ ಮಾಡುವನು. ಆದರೆ ಅವನು ಸೋತು ತನ್ನ ದೇಶಕ್ಕೆ ಹಿಂತಿರುಗುವನು.

[10]‘‘‘ಉತ್ತರದ ರಾಜನ ಮಗನು ಯುದ್ಧದ ಸಿದ್ಧತೆಯನ್ನು ಮಾಡುವನು. ಅವರಿಬ್ಬರೂ ಸೇರಿ ಒಂದು ದೊಡ್ಡ ಸೈನ್ಯವನ್ನು ಕೂಡಿಸುವರು. ಆ ಸೈನ್ಯವು ರಭಸದಿಂದ ಬಂದ ಪ್ರವಾಹದಂತೆ ದೇಶದಲ್ಲೆಲ್ಲ ಸಂಚರಿಸಿ ಯುದ್ಧ ಮಾಡುತ್ತಾ ದಕ್ಷಿಣ ರಾಜನ ದುರ್ಗದವರೆಗೆ ನುಗ್ಗುವದು. [11]ಆಗ ದಕ್ಷಿಣದ ರಾಜನು ಕೋಪದಿಂದ ಕೆಂಡವಾಗುವನು. ಅವನು ಉತ್ತರದ ರಾಜನ ವಿರುದ್ಧ ಹೋರಾಡುವದಕ್ಕಾಗಿ ಹೊರಬರುವನು. ಉತ್ತರದ ರಾಜನ ಹತ್ತಿರ ಅಪಾರವಾದ ಸೈನ್ಯವಿದ್ದರೂ ಅವನು ಯುದ್ಧದಲ್ಲಿ ಸೋಲುವನು. [12]ಉತ್ತರದ ಸೈನ್ಯವು ಸೋತು ಸೆರೆಯಾಗುವುದು. ದಕ್ಷಿಣರಾಜನು ತುಂಬ ಜಂಬ ಪಡುವನು ಮತ್ತು ಉತ್ತರದ ರಾಜನ ಸಾವಿರಾರು ಜನ ಸೈನಿಕರ ವಧೆ ಮಾಡುವನು. ಆದರೆ ಅವನು ಜಯಶೀಲನಾಗಿ ಮುಂದುವರೆಯುವದಿಲ್ಲ. [13]ಉತ್ತರದ ರಾಜನು ಇನ್ನೊಂದು ಸೈನ್ಯವನ್ನು ತೆಗೆದುಕೊಂಡು ಬರುವನು. ಈ ಸೈನ್ಯವು ಮೊದಲಿನ ಸೈನ್ಯಕ್ಕಿಂತ ದೊಡ್ಡದಾಗಿರುವದು. ಬಹಳ ವರ್ಷಗಳ ತರುವಾಯ ಅವನು ದಾಳಿಮಾಡುವನು. ಆ ಸೈನ್ಯವು ಬಹಳ ದೊಡ್ಡದಾಗಿದ್ದು ಹಲವಾರು ಆಯುಧಗಳಿಂದ ಸುಸಜ್ಜಿತವಾಗಿರುವದು. ಆ ಸೈನ್ಯವು ಯುದ್ಧಕ್ಕೆ ಸಿದ್ಧವಾಗಿರುವದು.

[14]‘‘‘ಆ ಕಾಲದಲ್ಲಿ ಹಲವಾರು ಜನರು ದಕ್ಷಿಣ ರಾಜನ ವಿರುದ್ಧವಾಗಿರುವರು. ಹೋರಾಡಲು ಇಚ್ಛಿಸುವ ನಿಮ್ಮ

ಸ್ವಂತ ಜನರಲ್ಲಿ ಕೆಲವರು ದಕ್ಷಿಣರಾಜನ ವಿರುದ್ಧ ದಂಗೆ
ಏಳುವರು. ಅವರು ಗೆಲ್ಲುವದಿಲ್ಲ. ಅವರು ಹೀಗೆ ಮಾಡಿ
ದರ್ಶನ ನಿಜವಾಗುವಂತೆ ಮಾಡುವರು. 15 ಆಮೇಲೆ
ಉತ್ತರದ ರಾಜನು ಬಂದು ಗೋಡೆಗಳಿಗೆ ದಿಬ್ಬಹಾಕಿ
ಒಂದು ಭದ್ರವಾದ ನಗರವನ್ನು ವಶಪಡಿಸಿಕೊಳ್ಳುವನು.
ದಕ್ಷಿಣದವರಲ್ಲಿ ಹೋರಾಡುವ ಶಕ್ತಿ ಇರುವದಿಲ್ಲ. ದಕ್ಷಿಣ
ಸೈನ್ಯದ ಉತ್ತಮ ಸೈನಿಕರೂ ಕೂಡ ಉತ್ತರದ ಸೈನ್ಯವನ್ನು
ತಡೆದು ನಿಲ್ಲಿಸಲು ಸಮರ್ಥರಾಗುವದಿಲ್ಲ.

16 ‘‘‘ಉತ್ತರದ ರಾಜನು ತನ್ನ ಇಷ್ಟಬಂದಂತೆ ಮಾಡು
ವನು. ಯಾರಿಂದಲೂ ಅವನನ್ನು ತಡೆಯಲು ಸಾಧ್ಯ
ವಾಗುವದಿಲ್ಲ. ಅವನು ಸುಂದರವಾದ ನಾಡಿನ ಮೇಲೆ
ಅಧಿಕಾರವನ್ನೂ ನಿಯಂತ್ರಣವನ್ನೂ ಸಂಪಾದಿಸುವನು.
ಅದನ್ನು ನಾಶಮಾಡುವ ಸಾಮರ್ಥ್ಯವನ್ನು ಹೊಂದಿರು
ವನು.

17 ಉತ್ತರದ ರಾಜನು ತನ್ನ ಸರ್ವಶಕ್ತಿಯಿಂದ ದಕ್ಷಿಣದ
ರಾಜನೊಂದಿಗೆ ಹೋರಾಡಲು ನಿರ್ಧರಿಸುವನು. ಅವನು
ದಕ್ಷಿಣದ ರಾಜನೊಂದಿಗೆ ಒಂದು ಒಪ್ಪಂದವನ್ನು ಮಾಡಿ
ಕೊಳ್ಳುವನು. ಉತ್ತರದ ರಾಜನು ತನ್ನ ಒಬ್ಬ ಮಗಳನ್ನು
ದಕ್ಷಿಣದ ರಾಜನಿಗೆ ಮದುವೆ ಮಾಡಿಕೊಡುವನು.
ದಕ್ಷಿಣದ ರಾಜನನ್ನು ಸೋಲಿಸುವ ಉದ್ದೇಶದಿಂದ ಉತ್ತ
ರದ ರಾಜನು ಹೀಗೆ ಮಾಡುವನು. ಆದರೆ ಅವನ ತಂತ್ರ
ಗಳು ಯಶಸ್ವಿಯಾಗುವದಿಲ್ಲ. ಅವುಗಳಿಂದ ಅವನಿಗೆ
ಸಹಾಯ ಸಿಕ್ಕುವದಿಲ್ಲ.

18 ‘‘‘ಆಮೇಲೆ ಉತ್ತರದ ರಾಜನು ಭೂಮಧ್ಯ ಸಾಗರದ
ಕರಾವಳಿಯ ದೇಶಗಳ ಕಡೆಗೆ ಗಮನಹರಿಸುವನು.
ಅವನು ಅನೇಕ ನಗರಗಳನ್ನು ಗೆಲ್ಲುವನು. ಆದರೆ ಆಗ
ಒಬ್ಬ ಸೇನಾಧಿಪತಿಯು ಉತ್ತರದ ರಾಜನ ಅಹಂಕಾರ
ವನ್ನೂ ಸೊಕ್ಕನ್ನೂ ಮುರಿದು ಬಿಡುವನು; ಅವನಿಗೆ
ಅವಮಾನ ಮಾಡುವನು.

19 ‘‘‘ಅದಾದ ಮೇಲೆ ಉತ್ತರದ ರಾಜನು ತನ್ನ ದೇಶದ
ಭದ್ರವಾದ ಕೋಟೆಗಳಿಗೆ ಹೋಗುವನು. ಆದರೆ ಅವನು
ದುರ್ಬಲನಾಗಿ ಬಿದ್ದುಹೋಗುವನು; ಕೊನೆ
ಗೊಳ್ಳುವನು.

20 ‘‘‘ಉತ್ತರದ ರಾಜನ ತರುವಾಯ ಒಬ್ಬ ಹೊಸ
ರಾಜನು ಬರುವನು. ಅವನು ಬಹು ವೈಭವಯುಕ್ತವಾದ
ಜೀವನವನ್ನು ನಡೆಸಲಿಚ್ಛಿಸಿ ಅದಕ್ಕೆ ಬೇಕಾಗುವ ಹಣವನ್ನು
ಸಂಗ್ರಹಿಸಲು ಒಬ್ಬ ತೆರಿಗೆ ಅಧಿಕಾರಿಯನ್ನು ಕಳುಹಿಸು
ವನು. ಆದರೆ ಕೆಲವು ವರ್ಷಗಳಲ್ಲಿ ಆ ರಾಜನು ನಾಶವಾಗು
ವನು. ಆದರೆ ಅವನು ಯುದ್ಧದಲ್ಲಿ ಮಡಿಯುವದಿಲ್ಲ.

21 ‘‘‘ಆ ರಾಜನ ತರುವಾಯ ಅತಿ ಕ್ರೂರನೂ ದ್ವೇಷ
ಮಯಿಯೂ ಆದ ಒಬ್ಬನು ರಾಜನಾಗುವನು. ಅವನು
ರಾಜ ಮನೆತನದವನಾಗಿರುವದಿಲ್ಲ. ಅವನು ವಂಚನೆ
ಯಿಂದ ರಾಜನಾಗಿರುತ್ತಾನೆ. ಜನರು ನೆಮ್ಮದಿಯಿಂದ
ನಿರ್ಭಯರಾಗಿರುವಾಗ ಅವನು ರಾಜ್ಯದ ಮೇಲೆ ದಾಳಿ
ಮಾಡುತ್ತಾನೆ.

22 ಅವನು ದೊಡ್ಡದಾದ ಮತ್ತು ಶಕ್ತಿಶಾಲಿಯಾದ
ಸೈನ್ಯಗಳನ್ನು ಸೋಲಿಸುತ್ತಾನೆ. ಅವನು ಒಪ್ಪಂದ ಮಾಡಿ
ಕೊಂಡ ನಾಯಕನಿಗೂ ಮೋಸ ಮಾಡುತ್ತಾನೆ. 23 ಅನೇಕ
ರಾಷ್ಟ್ರಗಳು ಕ್ರೂರಿಯಾದ ಮತ್ತು ವಂಚಕನಾದ ಆ ಅರಸ
ನೊಂದಿಗೆ ಒಪ್ಪಂದಗಳನ್ನು ಮಾಡಿಕೊಳ್ಳುವವು. ಆದರೆ
ಅವನು ಸುಳ್ಳು ಹೇಳಿ ಅವರನ್ನು ವಂಚಿಸುವನು. ಅವನು
ಹೆಚ್ಚಿನ ಅಧಿಕಾರವನ್ನು ಸಂಪಾದಿಸಿದರೂ ಕೆಲವೇ ಜನರು
ಅವನಿಗೆ ಬೆಂಬಲ ನೀಡುವರು.

24 ‘‘‘ಶ್ರೀಮಂತ ದೇಶಗಳು ನೆಮ್ಮದಿಯಿಂದಿರುವಾಗ
ಈ ಕ್ರೂರಿಯು ಪೂರ್ವಸೂಚನೆಯಿಲ್ಲದೆ ಅವುಗಳ
ಮೇಲೆ ದಾಳಿ ಮಾಡುವನು. ಅವನು ಸರಿಯಾದ ಸಮ
ಯಕ್ಕೆ ದಾಳಿ ಮಾಡುವನು; ಅವನ ಪೂರ್ವಿಕರು ವಿಫಲ
ರಾದ ದೇಶಗಳಲ್ಲಿ ಜಯ ಸಂಪಾದಿಸುವನು. ಅವನು
ಸೋಲಿಸಿದ ದೇಶಗಳನ್ನು ಕೊಳ್ಳೆಹೊಡೆದು ದೊರೆತ ಸಂಪ
ತ್ತನ್ನು ತನ್ನ ಅನುಯಾಯಿಗಳಲ್ಲಿ ಹಂಚುವನು. ಅವನು
ಭದ್ರವಾದ ನಗರಗಳನ್ನು ಹಿಡಿದುಕೊಳ್ಳಲು ಮತ್ತು ನಾಶ
ಮಾಡಲು ಯೋಜನೆಗಳನ್ನು ಮಾಡುವನು. ಅವನಿಗೆ
ಜಯಸಿಕ್ಕಿದರೂ ಅದು ಸ್ವಲ್ಪ ಕಾಲದವರೆಗೆ ಮಾತ್ರ
ಇರುತ್ತದೆ.

25 ‘‘‘ಕ್ರೂರನಾದ ಮತ್ತು ವಂಚಕನಾದ ಆ ರಾಜನ
ಹತ್ತಿರ ಅತಿದೊಡ್ಡ ಸೈನ್ಯವಿರುವದು. ಅವನು ಆ ಸೈನ್ಯದಿಂದ
ತನ್ನ ಶಕ್ತಿಯನ್ನು ಪ್ರದರ್ಶಿಸಲು ಧೈರ್ಯ ತಂದುಕೊಂಡು
ದಕ್ಷಿಣದ ರಾಜನ ಮೇಲೆ ದಾಳಿ ಮಾಡುವನು. ದಕ್ಷಿಣದ
ರಾಜನು ಅತಿದೊಡ್ಡದಾದ ಮತ್ತು ಶಕ್ತಿಶಾಲಿಯಾದ ಸೈನ್ಯ
ವನ್ನು ಕೂಡಿಸಿಕೊಂಡು ಯುದ್ಧಕ್ಕೆ ಹೋಗುವನು. ಆದರೆ
ಅವನ ವೈರಿಗಳು ರಹಸ್ಯವಾಗಿ ಒಂದು ಕುಯುಕ್ತಿಯನ್ನು
ಮಾಡುವರು. ದಕ್ಷಿಣದ ರಾಜನು ಸೋಲುವನು.
26 ದಕ್ಷಿಣದ ರಾಜನ ಒಳ್ಳೆಯ ಸ್ನೇಹಿತರೆಂದು ಭಾವಿಸ
ಲಾದ ಜನರು ಅವನನ್ನು ನಾಶಮಾಡಲು ಪ್ರಯತ್ನ
ಮಾಡುವರು. ಅವನ ಸೈನ್ಯಕ್ಕೆ ಸೋಲುಂಟಾಗುವದು.
ಅವನ ಅನೇಕ ಸೈನಿಕರು ಯುದ್ಧದಲ್ಲಿ ಮಡಿಯುವರು.
27 ಆ ಇಬ್ಬರು ಅರಸರು ಒಬ್ಬರಿಗೊಬ್ಬರು ಕೇಡುಮಾಡ
ಬೇಕೆಂದು ನಿಶ್ಚಯಿಸುವರು. ಅವರಿಬ್ಬರೂ ಒಂದೇ
ಮೇಜಿನಲ್ಲಿ ಕುಳಿತು ಕೊಳ್ಳುವರು ಮತ್ತು ಒಬ್ಬರಿಗೊಬ್ಬರು
ಸುಳ್ಳು ಹೇಳುವರು. ಆದರೆ ಇದರಿಂದ ಅವರಿಬ್ಬರಲ್ಲಿ
ಯಾರಿಗೂ ಒಳ್ಳೆಯದಾಗುವದಿಲ್ಲ. ಏಕೆಂದರೆ ದೇವರು
ಅವರ ಅಂತ್ಯ ಕಾಲವನ್ನು ನಿರ್ಧರಿಸಿದ್ದಾನೆ.’’

28 ‘‘‘ಉತ್ತರದ ರಾಜನು ಅಪಾರ ಸಂಪತ್ತಿನೊಂದಿಗೆ
ಸ್ವದೇಶಕ್ಕೆ ಮರಳುವನು. ಆಗ ಅವನು ಪವಿತ್ರ

ಒಡಂಬಡಿಕೆಗೆ* ವಿರುದ್ಧವಾಗಿ ಆಚರಿಸುವ ತೀರ್ಮಾನ
ಮಾಡುವನು. ಅವನು ಯೋಚಿಸಿದಂತೆ ಮಾಡಿ ತನ್ನ
ದೇಶಕ್ಕೆ ಹಿಂತಿರುಗಿ ಹೋಗುವನು.

29 “ಸರಿಯಾದ ಸಮಯ ನೋಡಿ ಉತ್ತರದ ರಾಜನು
ದಕ್ಷಿಣದ ರಾಜನ ಮೇಲೆ ದಾಳಿ ಮಾಡುವನು. ಆದರೆ
ಈ ಸಲ ಅವನು ಹಿಂದಿನಂತೆ ಜಯಶೀಲನಾಗುವದಿಲ್ಲ.
30 ಕಿತ್ತೀಮಿನ ಹಡಗುಗಳು ಬಂದು ಉತ್ತರದ ರಾಜ
ನೊಂದಿಗೆ ಯುದ್ಧ ಮಾಡುವವು. ಆ ಹಡಗುಗಳು ಬರು
ವದನ್ನು ಅವನು ನೋಡಿ ಹೆದರಿಕೊಳ್ಳುವನು. ಅವನು
ಪವಿತ್ರ ಒಡಂಬಡಿಕೆಯ ಮೇಲೆ ಕೋಪಿಸಿಕೊಂಡು
ಹಿಂತಿರುಗುವನು. ಅವನು ಹಿಂತಿರುಗಿದ ಮೇಲೆ ಪವಿತ್ರ
ಒಡಂಬಡಿಕೆಯನ್ನು ತೊರೆದವರಿಗೆ ಸಹಾಯ ಮಾಡು
ವನು.

31 ಉತ್ತರದ ರಾಜನು ಜೆರುಸಲೇಮಿನ ಪವಿತ್ರಾಲ
ಯವನ್ನು ಹೊಲಸು ಮಾಡಲು ತನ್ನ ಸೈನಿಕರನ್ನು ಕಳುಹಿಸು
ವನು. ದೈನಂದಿನ ಯಜ್ಞಗಳನ್ನು ಅರ್ಪಿಸದಂತೆ ಅವರು
ತಡೆಯುವರು. ಆಮೇಲೆ ಅವರು ವಿನಾಶಕಾರಿಯಾದ
ಅಸಹ್ಯ ವಸ್ತುವನ್ನು ಪ್ರತಿಷ್ಠಾಪಿಸುವರು.

32 “ಉತ್ತರದ ರಾಜನು ಪವಿತ್ರ ಒಡಂಬಡಿಕೆಯನ್ನು
ತೊರೆದ ಯೆಹೂದ್ಯರನ್ನು ಸುಳ್ಳುಮಾತುಗಳಿಂದ ಮತ್ತು
ನಯವಾದ ನುಡಿಗಳಿಂದ ವಂಚಿಸುವನು. ಆ ಯೆಹೂ
ದ್ಯರು ಅದಕ್ಕಿಂತಲೂ ಹೆಚ್ಚಿನ ಪಾಪಕಾರ್ಯಗಳನ್ನು
ಮಾಡುವರು. ಆದರೆ ದೇವರನ್ನು ಅರಿತು ಅವನ ಆಜ್ಞೆ
ಪಾಲಿಸುತ್ತಿರುವ ಯೆಹೂದ್ಯರು ದೃಢಚಿತ್ತರಾಗಿರುವರು;
ಅವರು ಅವನನ್ನು ವಿರೋಧಿಸುವರು.

33 “ಜ್ಞಾನಿಗಳಾದ ಯೆಹೂದ್ಯರು ಏನು ನಡೆದಿದೆ
ಎಂಬುದನ್ನು ತಿಳಿದುಕೊಳ್ಳಲು ಜನರಿಗೆ ಸಹಾಯ
ಮಾಡುವರು. ಜ್ಞಾನಿಗಳಾದವರು ಸಹ ಅನೇಕ ಹಿಂಸೆಗ
ಳಿಗೆ ತುತ್ತಾಗುವರು. ಕೆಲವು ಜನ ಜ್ಞಾನಿಗಳು ಕತ್ತಿಯಿಂದ
ಕೊಲ್ಲಲ್ಪಡುವರು, ಕೆಲವರನ್ನು ಬೆಂಕಿಯಲ್ಲಿ ಹಾಕಲಾಗು
ವದು ಅಥವಾ ಬಂಧಿಸಲಾಗುವುದು. ಕೆಲವು ಯೆಹೂದ್ಯರ
ಮನೆಯನ್ನು, ಆಸ್ತಿಪಾಸ್ತಿಯನ್ನು ಕಿತ್ತುಕೊಳ್ಳಲಾಗುವದು.
34 ಆ ಜ್ಞಾನಿಗಳಾದ ಯೆಹೂದ್ಯರು ಶಿಕ್ಷೆಗೊಳಗಾದಾಗ
ಅವರಿಗೆ ಸ್ವಲ್ಪ ಸಹಾಯ ಸಿಕ್ಕುವದು. ಆದರೆ ಜ್ಞಾನಿಗಳಾದ
ಆ ಯೆಹೂದ್ಯರನ್ನು ಸೇರಿಕೊಳ್ಳುವ ಅನೇಕ ಯೆಹೂದ್ಯರು
ಕಪಟಿಗಳಾಗಿರುತ್ತಾರೆ.

35 ಜ್ಞಾನಿಗಳಾದ ಕೆಲವು ಯೆಹೂದ್ಯರು ತಪ್ಪುಗಳನ್ನು
ಮಾಡಿ ಬಿದ್ದುಹೋಗುವರು. ಆದರೆ ಹಿಂಸೆ ನಡೆಯ
ಬೇಕು. ಏಕೆಂದರೆ ಅಂತ್ಯಕಾಲ ಬರುವವರೆಗೆ ಅವರು
ದೃಢಚಿತ್ತರೂ ಶುದ್ಧರೂ ನಿಷ್ಕಳಂಕರೂ ಆಗಬೇಕು.
ಸರಿಯಾದ ಸಮಯಕ್ಕೆ ಅಂತ್ಯಕಾಲ ಬರುವದು.”

### ಆತ್ಮ ಪ್ರಶಂಸೆ ಮಾಡಿಕೊಳ್ಳುವ ಅರಸನು

36 “ಉತ್ತರದ ರಾಜನು ತನ್ನ ಮನಸ್ಸಿಗೆ ಬಂದದ್ದನ್ನು
ಮಾಡುವನು; ಬಡಾಯಿ ಕೊಚ್ಚಿಕೊಳ್ಳುವನು. ಅವನು
ತನ್ನನ್ನು ತಾನು ಹೊಗಳಿಕೊಳ್ಳುವನು ಮತ್ತು ದೇವರಿಗಿಂತ
ತಾನು ಹೆಚ್ಚಿನವನೆಂದು ಭಾವಿಸುವನು. ಅವನು ಯಾರೂ
ಎಂದೂ ಕೇಳದ ಸಂಗತಿಗಳನ್ನು ಹೇಳುವನು. ಅವನು
ಮಹೋನ್ನತನಾದ ದೇವರ ವಿರುದ್ಧವಾಗಿ ಅಂತಹ ಸಂಗತಿ
ಗಳನ್ನು ಹೇಳುವನು. ಎಲ್ಲ ಕೆಟ್ಟ ಸಂಗತಿಗಳು ಜರಗುವ
ವರೆಗೂ ಅವನು ಜಯ ಪಡೆಯುವನು. ಏನು ನಡೆಯ
ಬೇಕೆಂದು ದೇವರು ನಿಶ್ಚಯ ಮಾಡಿರುವನೋ ಅದು
ನಡೆಯುವದು.

37 “ಆ ಉತ್ತರದ ರಾಜನು ಅವನ ಪೂರ್ವಿಕರು ಪೂಜಿ
ಸಿದ ದೇವರುಗಳನ್ನೂ ಸ್ತ್ರೀಯರು ಪೂಜಿಸುವ ವಿಗ್ರಹ
ಗಳನ್ನೂ ಲಕ್ಷಿಸನು. ಅವನು ಯಾವ ದೇವರನ್ನೂ
ಲಕ್ಷಿಸನು. ಅದಕ್ಕೆ ಬದಲಾಗಿ ಅವನು ತನ್ನನ್ನು ತಾನು
ಹೊಗಳಿಕೊಳ್ಳುವನು; ತನ್ನನ್ನು ಎಲ್ಲ ದೇವರುಗಳಿ
ಗಿಂತಲೂ ಶ್ರೇಷ್ಠನೆಂದು ತೋರಿಸಿಕೊಳ್ಳುವನು.
38 ಉತ್ತರದ ರಾಜನು ಯಾವ ದೇವರನ್ನೂ ಪೂಜಿಸನು,
ಅವನು ಅಧಿಕಾರವನ್ನು ಪೂಜಿಸುವನು. ಅಧಿಕಾರ ಮತ್ತು
ಶಕ್ತಿ ಇವುಗಳು ಅವನ ದೇವರು, ಅವನ ಪೂರ್ವಿಕರು
ಅವನಷ್ಟು ಅಧಿಕಾರ ಪ್ರಿಯರಾಗಿರಲಿಲ್ಲ. ಅಧಿಕಾರ
ದೇವತೆಯನ್ನು ಅವನು ಬೆಳ್ಳಿಬಂಗಾರಗಳಿಂದ ಅಮೂಲ್ಯ
ವಾದ ರತ್ನಾಭರಣಗಳಿಂದ ಮತ್ತು ಬೇರೆ ಕಾಣಿಕೆಗಳಿಂದ
ಸೇವಿಸುವನು.

39 “ಉತ್ತರದ ರಾಜನು ಅನ್ಯದೇವರ ಸಹಾಯದಿಂದ
ಬಲವಾದ ಕೋಟೆಗಳನ್ನು ಆಕ್ರಮಿಸುವನು. ಅವ
ನೊಂದಿಗೆ ಸೇರುವ ಅನ್ಯರಾಜರುಗಳನ್ನು ಬಹಳಷ್ಟು
ಗೌರವಿಸುವನು. ಅಂಥ ಅರಸರು ಬಹುಜನರನ್ನು ಆಳು
ವಂತೆ ಮಾಡುವನು. ಆ ರಾಜನು ಅವರು ಆಳುವ
ಭೂಮಿಯ ತೆರಿಗೆಯನ್ನು ಕೊಡುವಂತೆ ಮಾಡುವನು.

40 “ಅಂತ್ಯಕಾಲದ ಸಮಯಕ್ಕೆ ದಕ್ಷಿಣದ ರಾಜನು
ಉತ್ತರದ ರಾಜನೊಂದಿಗೆ ಯುದ್ಧ ಮಾಡುವನು.
ಉತ್ತರದ ರಾಜನು ಅವನ ಮೇಲೆ ಧಾಳಿ ಮಾಡುವನು.
ಅವನು ರಥ, ಕುದುರೆ ಸವಾರರು, ಹಡಗುಪಡೆಯೊಂದಿಗೆ
ಧಾಳಿ ಮಾಡುವನು. ಆ ಉತ್ತರದ ರಾಜನು ಪ್ರವಾಹದಂತೆ
ರಭಸದಿಂದ ದೇಶದಲ್ಲೆಲ್ಲ ಮುನ್ನುಗ್ಗುವನು. 41 ಉತ್ತರದ
ರಾಜನು ಸುಂದರವಾದ ನಾಡಿನ* ಮೇಲೆ ಧಾಳಿ ಮಾಡು
ವನು. ಉತ್ತರದ ರಾಜನು ಹಲವಾರು ದೇಶಗಳನ್ನು ಗೆದ್ದು

---

**ಪರಿಶುದ್ಧ ಒಪ್ಪಂದ** ಇದರ ಅರ್ಥ ಬಹುಶಃ ಯೆಹೂದ್ಯ ಕುಲದವರು ಎಂದಿರಬಹುದು.

**ಸುಂದರವಾದ ನಾಡು** ಜೆರುಸಲೇಮ್ ಅಥವಾ ಯೆಹೂದ ಪ್ರಾಂತ.

ಕೊಳ್ಳುವನು. ಆದರೆ ಎದೋಮ್ಯರು, ಮೋವಾಬ್ಯರು
ಮತ್ತು ಅಮ್ಮೋನಿನ ನಾಯಕರು ಅವನ ಕೈಯಿಂದ ತಪ್ಪಿಸಿ
ಕೊಳ್ಳುವರು. 42ಉತ್ತರದ ರಾಜನು ಹಲವಾರು ದೇಶ
ಗಳಲ್ಲಿ ತನ್ನ ಪ್ರಾಬಲ್ಯವನ್ನು ಮೆರೆಸುವನು. ಅವನು ಎಂಥ
ಶಕ್ತಿಶಾಲಿ ಎಂಬುದು ಈಜಿಪ್ಟಿಗೂ ಗೊತ್ತಾಗುವುದು.
43ಅವನು ಬೆಳ್ಳಿ ಬಂಗಾರಗಳ ನಿಧಿನಿಕ್ಷೇಪಗಳನ್ನು ಮತ್ತು
ಈಜಿಪ್ಟಿನ ಒಳ್ಳೊಳ್ಳೆಯ ಸಮಸ್ತ ವಸ್ತುಗಳನ್ನು ವಶಪಡಿಸಿ
ಕೊಳ್ಳುವನು. ಲೂಬ್ಯರು ಮತ್ತು ಕೂಷ್ಯರು ಅವನ ಸ್ವಾಮ್ಯ
ವನ್ನು ಒಪ್ಪಿಕೊಳ್ಳುವರು. 44ಹೀಗಿರಲು ಉತ್ತರದ ರಾಜನು
ಪೂರ್ವದಿಕ್ಕಿನಿಂದ ಮತ್ತು ಉತ್ತರದಿಕ್ಕಿನಿಂದ ಬರುವ
ಸಮಾಚಾರಗಳನ್ನು ಕೇಳಿ ಭಯಪಡುವನು ಮತ್ತು
ರೊಚ್ಚಿಗೇಳುವನು. ಹಲವಾರು ದೇಶಗಳನ್ನು ಸಂಪೂರ್ಣ
ವಾಗಿ ನಾಶಮಾಡಲು ಅವನು ಹೋಗುವನು.
45ಸಮುದ್ರಕ್ಕೂ ಸುಂದರವಾದ ಪವಿತ್ರ ಪರ್ವತಕ್ಕೂ *
ನಡುವೆ, ಅರಮನೆಯಂತಹ ತನ್ನ ಗುಡಾರಗಳನ್ನು
ಹಾಕಿಸುವನು. ಕೊನೆಗೆ ಆ ಕೆಟ್ಟ ಅರಸನು ಸತ್ತು
ಹೋಗುವನು. ಅವನ ಅಂತ್ಯಕಾಲದ ಹೊತ್ತಿಗೆ ಅವನಿಗೆ
ಸಹಾಯ ಮಾಡಲು ಯಾರೂ ಇರುವದಿಲ್ಲ.''

12 ''ದರ್ಶನದಲ್ಲಿ ಕಾಣಿಸಿಕೊಂಡ ಮನುಷ್ಯನು,
''ದಾನಿಯೇಲನೇ, ಆಗ ದೇವದೂತನಾದ
ಮಿಕಾಯೇಲನು ಏಳುವನು. ಮಿಕಾಯೇಲನು
ಯೆಹೂದ್ಯರಾದ ನಿಮ್ಮ ಹಿತಾಸಕ್ತಿಗಳನ್ನು ನೋಡಿಕೊಳ್ಳು
ವನು. ಮಹಾ ಸಂಕಟದ ಕಾಲ ಬರುವದು. ಭೂಮಿಯ
ಮೇಲೆ ರಾಷ್ಟ್ರಗಳು ಹುಟ್ಟಿದಂದಿನಿಂದ ಸಂಭವಿಸದಂತಹ
ಸಂಕಟಗಳು ಸಂಭವಿಸುವವು. ಆದರೆ ದಾನಿಯೇಲನೇ,
ನಿಮ್ಮ ಜನಗಳಲ್ಲಿ ಯಾರ ಹೆಸರುಗಳು 'ಜೀವಬಾಧ್ಯರ
ಗ್ರಂಥದಲ್ಲಿ' ಬರೆಯಲ್ಪಟ್ಟಿದೆಯೋ ಅವರೆಲ್ಲರನ್ನು ರಕ್ಷಿಸ
ಲಾಗುವುದು.

2ಮರಣ ಹೊಂದಿದ ಸಮಾಧಿಗಳಲ್ಲಿ ದೀರ್ಘನಿದ್ರೆ
ಮಾಡುತ್ತಿದ್ದವರಲ್ಲಿ ಅನೇಕರು ಎಚ್ಚೆತ್ತುಕೊಳ್ಳುವರು.
ಕೆಲವರು ಎಚ್ಚೆತ್ತು ನಿತ್ಯಜೀವವನ್ನು ಅನುಭವಿಸುವರು.
ಕೆಲವರು ಎಚ್ಚೆತ್ತು ನಿತ್ಯನಿಂದನೆಗಳನ್ನೂ ತಿರಸ್ಕಾರಗಳನ್ನೂ
ಅನುಭವಿಸುವರು. 3ಜ್ಞಾನಿಗಳು ತೇಜೋಮಯವಾದ
ಆಕಾಶಮಂಡಲದಂತೆ ಪ್ರಕಾಶಿಸುವರು. ನೀತಿವಂತರಾಗಿ
ಜೀವಿಸಲು ಅವರು ಅನೇಕರಿಗೆ ಉಪದೇಶಿಸಿದರು.
ಯುಗಯುಗಾಂತರಗಳಲ್ಲಿಯೂ ನಕ್ಷತ್ರಗಳ ಹಾಗೆ
ಹೊಳೆಯುವರು.

4''ದಾನಿಯೇಲನೇ, ನೀನು ಈ ಸಂದೇಶವನ್ನು ರಹಸ್ಯ
ವಾಗಿಡು. ಇದನ್ನು ಬರೆದ ಪುಸ್ತಕಕ್ಕೆ ಮುದ್ರೆಹಾಕು. ಅಂತ್ಯ
ಕಾಲದವರೆಗೆ ನೀನು ಇದನ್ನು ರಹಸ್ಯವಾಗಿ ಇಡಬೇಕು.
ನಿಜವಾದ ಜ್ಞಾನಕ್ಕಾಗಿ ಬಹುಜನರು ಅತ್ತಿತ್ತ ಸಂಚರಿಸು
ವರು. ನಿಜವಾದ ಜ್ಞಾನ ಬೆಳೆಯುವದು.

5''ಆಗ, ದಾನಿಯೇಲನೆಂಬ ನಾನು, ಮತ್ತಿಬ್ಬರನ್ನು
ಕಂಡೆನು. ಅವರೊಳಗೆ ಒಬ್ಬನು ನದಿಯ ಈಚೆ ದಡ
ದಲ್ಲಿಯೂ ಇನ್ನೊಬ್ಬನು ಆಚೆ ದಡದಲ್ಲಿಯೂ ನಿಂತಿ
ದ್ದರು. 6ನಾರುಮಡಿಯನ್ನು ಧರಿಸಿದ್ದವನೊಬ್ಬನು ನದಿ
ಯಲ್ಲಿ ನೀರಿನ ಮೇಲೆ ನಿಂತಿದ್ದನು. ಅವರಿಬ್ಬರಲ್ಲಿ ಒಬ್ಬನು
'ಆ ಅದ್ಭುತ ಘಟನೆಗಳು ಸಂಭವಿಸುವದಕ್ಕೆ ಇನ್ನು ಎಷ್ಟು
ಕಾಲ ಬೇಕು ?' ಎಂದು ಅವನನ್ನು ಕೇಳಿದನು.

7''ನಾರುಮಡಿಯನ್ನು ಧರಿಸಿ ನೀರಿನ ಮೇಲೆ ನಿಂತು
ಕೊಂಡಿದ್ದ ಮನುಷ್ಯನು ತನ್ನ ಎರಡೂ ಕೈಗಳನ್ನು ಆಕಾಶದ
ಕಡೆಗೆ ಎತ್ತಿದನು. ಅವನು ಶಾಶ್ವತವಾದ ದೇವರ ಮೇಲೆ
ಆಣೆಮಾಡಿ 'ಮೂರುವರೆ ವರ್ಷ ಕಳೆಯಬೇಕು. ದೇವರ
ಭಕ್ತರ ಬಲವು ಸಂಪೂರ್ಣವಾಗಿ ಮುರಿದು ಹೋಗು
ವದು. ಆಮೇಲೆ ಎಲ್ಲಾ ಸಂಗತಿಗಳು ಜರುಗುವವು'
ಎಂದನು.

8''ನಾನು ಉತ್ತರವನ್ನು ಕೇಳಿದೆ, ಆದರೆ ನನಗೆ ಅದು
ಅರ್ಥವಾಗಲಿಲ್ಲ. ಆದುದರಿಂದ ನಾನು, 'ಸ್ವಾಮೀ, ಈ
ಎಲ್ಲಾ ಸಂಗತಿಗಳು ಜರುಗಿದ ಮೇಲೆ ಏನು ಸಂಭವಿಸು
ವದು?'' ಎಂದು ಕೇಳಿದೆ.

9''ದಾನಿಯೇಲನೇ, ನಿನ್ನ ಜೀವನ ಸಾಗಲಿ. ಈ
ಸಂದೇಶವು ರಹಸ್ಯವಾದದ್ದು. ಅಂತ್ಯಕಾಲ ಬರುವವರೆಗೆ
ಇದು ರಸಹ್ಯವಾಗಿ ಉಳಿಯುವದು. 10ಅನೇಕ ಜನರು
ಶುದ್ಧೀಕರಿಸಲ್ಪಡುವರು; ಅವರು ತಮ್ಮನ್ನು ತಾವು ಶುಭ್ರ
ಗೊಳಿಸಿಕೊಳ್ಳುವರು. ಆದರೆ ದುಷ್ಟರು ದುಷ್ಟರಾಗಿಯೇ
ಉಳಿಯುವರು. ಆ ದುಷ್ಟರು ಈ ಸಂಗತಿಗಳನ್ನು ಅರಿತು
ಕೊಳ್ಳುವದಿಲ್ಲ. ಜ್ಞಾನಿಗಳು ಇವೆಲ್ಲವನ್ನು ಅರಿತು
ಕೊಳ್ಳುತ್ತಾರೆ.

11''ನಿತ್ಯಹೋಮವು ನಿಲ್ಲಿಸಲ್ಪಟ್ಟು ಹಾಳುಮಾಡುವ
ಅಸಹ್ಯವಸ್ತುವು ಪ್ರತಿಷ್ಠಿತವಾದ ಮೇಲೆ ಒಂದು ಸಾವಿರದ
ಇನ್ನೂರ ತೊಂಭತ್ತು ದಿನಗಳು ಕಳೆಯಬೇಕು. 12ಕಾದು
ಕೊಂಡು ಒಂದು ಸಾವಿರದ ಮುನ್ನೂರ ಮೂವತ್ತೈದು
ದಿನಗಳ ಕೊನೆಯವರೆಗೆ ತಾಳಿರುವವನು ಧನ್ಯನು.

13'''ದಾನಿಯೇಲನೇ, ನೀನು ಹೋಗಿ ಕೊನೆಯವರೆಗೆ
ನಿನ್ನ ಜೀವನವನ್ನು ಸಾಗಿಸು. ನೀನು ದೀರ್ಘನಿದ್ರೆಯನ್ನು
ಪಡೆಯುವೆ. ಅಂತ್ಯಕಾಲದಲ್ಲಿ, ನೀನು ದೀರ್ಘ ನಿದ್ರೆ
ಯಿಂದ ಎಚ್ಚೆತ್ತು ನಿನ್ನ ಸ್ವಾಸ್ತ್ಯವನ್ನು ಪಡೆಯುವೆ''' ಎಂದು
ಉತ್ತರ ಬಂದಿತು.

---

**ಸುಂದರವಾದ ಪರಿಶುದ್ಧ ಪರ್ವತ** ಜೆರುಸಲೇಮ್ ನಗರವು ಕಟ್ಟಲ್ಪಟ್ಟ
ಪರ್ವತ.

# ಹೋಶೇಯ

### ಹೋಶೇಯನ ಮುಖಾಂತರ ದೇವರಾದ ಯೆಹೋವನ ಸಂದೇಶ

1 ಬೆಯೇರಿಯ ಮಗನಾದ ಹೋಶೇಯನಿಗೆ
ಯೆಹೋವನಿಂದ ಬಂದ ಸಂದೇಶ: ಈ ಸಂದೇಶವು
ಯೆಹೂದ ಪ್ರಾಂತ್ಯದ ಅರಸರಾದ ಉಜ್ಜೀಯ
ಯೋಥಾಮ, ಅಹಾಜ ಮತ್ತು ಹಿಜ್ಕೀಯ ಇವರ
ಆಳ್ವಿಕೆಯ ಸಮಯದಲ್ಲಿ ಬಂದಿತು. ಇದು ಇಸ್ರೇಲಿನ
ಅರಸನಾದ ಯೋವಾಷನ ಮಗನಾದ ಯಾರೊಬ್ಬಾಮನ
ಆಳ್ವಿಕೆಯ ಕಾಲ.
2ಹೋಶೇಯನಿಗೆ ಯೆಹೋವನಿಂದ ಬಂದ ಸಂದೇಶ
ದಲ್ಲಿ ಇದು ಮೊದಲನೆಯದು. ಯೆಹೋವನು ಹೇಳಿದ್ದೇ
ನೆಂದರೆ, ‘‘ನೀನು ಹೋಗಿ ಒಬ್ಬ ವೇಶ್ಯೆಯನ್ನು ಮದುವೆ
ಯಾಗು. ಆ ವೇಶ್ಯೆಯಿಂದ* ಮಕ್ಕಳನ್ನು ಪಡೆದುಕೋ.
ಯಾಕೆಂದರೆ ಈ ದೇಶದ ಜನರು ಸೂಳೆಯಂತೆ ವರ್ತಿಸಿರು
ತ್ತಾರೆ. ಅವರು ಯೆಹೋವನಿಗೆ ಅಪನಂಬಿಗಸ್ತಿಕೆಯುಳ್ಳವ
ರಾಗಿರುತ್ತಾರೆ.’’

### ಇಜ್ರೇಲನ ಜನನ

3ಹಾಗೆ ಹೋಶೇಯನು ದಿಬ್ಲಯೀಮನ ಮಗಳಾದ
ಗೋಮೆರ್ ಎಂಬಾಕೆಯನ್ನು ಮದುವೆಯಾದನು.
ಗೋಮೆರಳು ಗರ್ಭಿಣಿಯಾಗಿ ಹೋಶೇಯನಿಗೆ ಒಬ್ಬ
ಗಂಡು ಮಗನನ್ನು ಹೆತ್ತಳು. 4ಹೋಶೇಯನಿಗೆ
ಯೆಹೋವನು ಹೇಳಿದ್ದೇನೆಂದರೆ, ‘‘ಅವನಿಗೆ ಇಜ್ರೇಲ್
ಎಂದು ಹೆಸರನ್ನಿಡು. ಯಾಕೆಂದರೆ, ಇನ್ನು ಸ್ವಲ್ಪ ಸಮಯ
ದಲ್ಲಿ ನಾನು ಯೇಹುವಿನ ಸಂತತಿಯವರನ್ನು ಶಿಕ್ಷಿಸು
ವೆನು. ಅವನು ಇಜ್ರೇಲ್ ತಗ್ಗಿನಲ್ಲಿ ರಕ್ತವನ್ನು ಸುರಿಸಿರು
ತ್ತಾನಲ್ಲಾ? ಆ ಮೇಲೆ ನಾನು ಇಸ್ರೇಲ್ ರಾಜ್ಯಕ್ಕೆ ಅಂತ್ಯ
ವನ್ನು ತರುವೆನು. 5ಆಗ ಇಜ್ರೇಲ್ ತಗ್ಗಿನಲ್ಲಿ ಇಸ್ರೇಲಿನ
ಬಿಲ್ಲನ್ನು ತುಂಡು ಮಾಡುವೆನು.’’

### ಲೋರುಹಾಮಳ ಜನನ

6ಗೋಮೆರಳು ತಿರುಗಿ ಗರ್ಭಿಣಿಯಾಗಿ ಒಬ್ಬ ಮಗ
ಳನ್ನು ಹೆತ್ತಳು. ಯೆಹೋವನು ಹೋಶೇಯನಿಗೆ, ಆಕೆಗೆ,
‘‘ಲೋರುಹಾಮ’’ ಎಂಬ ಹೆಸರನ್ನಿಡಲು ಹೇಳಿದನು.
‘‘ಯಾಕೆಂದರೆ, ನಾನು ಇನ್ನು ಮುಂದೆ ಇಸ್ರೇಲ್ ಜನಾಂಗ
ವನ್ನು ಕ್ಷಮಿಸುವುದಿಲ್ಲ. 7ಆದರೆ ನಾನು ಯೆಹೂದ ದೇಶಕ್ಕೆ
ಕರುಣೆಯನ್ನು ತೋರಿಸುವೆನು. ನಾನು ಅವರನ್ನು ರಕ್ಷಿಸು
ವೆನು. ಅವರನ್ನು ರಕ್ಷಿಸಲು ನಾನು ಬಿಲ್ಲು ಬಾಣಗಳನ್ನು
ಉಪಯೋಗಿಸುವದಿಲ್ಲ. ಅಥವಾ ಯುದ್ಧಾಶ್ವಗಳ
ನ್ನಾಗಲೀ ಸೈನ್ಯವನ್ನಾಗಲೀ ಉಪಯೋಗಿಸುವದಿಲ್ಲ. ನನ್ನ
ಸ್ವಂತ ಸಾಮರ್ಥ್ಯದಿಂದಲೇ ನಾನು ಅವರನ್ನು
ರಕ್ಷಿಸುವೆನು.’’

### ಲೋಅಮ್ಮಿಯ ಜನನ

8ಗೋಮೆರಳು ಲೋರುಹಾಮಳಿಗೆ ಮೊಲೆಯುಣ್ಣಿಸು
ವದನ್ನು ನಿಲ್ಲಿಸಿದ ಬಳಿಕ ಆಕೆಯು ತಿರುಗಿ ಗರ್ಭಿಣಿ
ಯಾದಳು. ಆಕೆ ಒಬ್ಬ ಗಂಡು ಮಗನನ್ನು ಹೆತ್ತಳು. 9ಆಗ
ಯೆಹೋವನು, ‘‘ಅವನಿಗೆ ಲೋಅಮ್ಮಿ ಎಂದು
ಹೆಸರಿಡು. ಯಾಕೆಂದರೆ ನೀವು ನನ್ನ ಜನರಲ್ಲ; ನಾನು
ನಿಮ್ಮ ದೇವರಲ್ಲ’’ ಎಂದು ಹೇಳಿದನು.

### ಇಸ್ರೇಲರು ಹೆಚ್ಚಾಗುವರು ಎಂಬ ಯೆಹೋವನ ವಾಗ್ದಾನ

10‘‘ಇನ್ನು ಮುಂದೆ ಇಸ್ರೇಲರ ಜನಸಂಖ್ಯೆಯು ಸಮು
ದ್ರದ ಮರಳಿನಂತಿರುವದು. ನೀವು ಮರಳನ್ನು ಅಳತೆ
ಮಾಡಲೂ ಅದನ್ನು ಲೆಕ್ಕಿಸಲೂ ಸಾಧ್ಯವಿಲ್ಲ. ಆಗ, ‘ನೀವು
ನನ್ನ ಜನರಲ್ಲ’ ಎಂಬ ಹೇಳಿಕೆಯ ಬದಲಾಗಿ, ‘ನೀವು
ಜೀವಸ್ವರೂಪನಾದ ದೇವರ ಮಕ್ಕಳು’ ಎಂಬದಾಗಿ
ಕರೆಯಲ್ಪಡುವಿರಿ.
11‘‘ಆಗ ಇಸ್ರೇಲಿನ ಪ್ರಜೆಗಳು ಮತ್ತು ಯೆಹೂದ
ಪ್ರಾಂತ್ಯದ ಪ್ರಜೆಗಳು ಒಂದಾಗಿ ಸೇರಲ್ಪಡುವರು. ತಮಗೆ
ಒಬ್ಬ ಅರಸನನ್ನು ಅವರು ಆರಿಸಿಕೊಳ್ಳುವರು. ಅವರ
ಜನಾಂಗಕ್ಕೆ ಆ ದೇಶವು ಸಾಲದೆ ಹೋಗುವದು.

---

**ವೇಶ್ಯೆಯಿಂದ** ಅಂದರೆ ಆಕೆಯಲ್ಲಿ ಹುಟ್ಟುವ ಮಕ್ಕಳು ಆಕೆಯ ಸೂಳೆತನದ ಫಲವಾಗಿವೆ.

ಇಜ್ರೇಲನ ದಿನವು ನಿಜವಾಗಿಯೂ ಮಹತ್ವವುಳ್ಳದ್ದಾ
ಗಿರುವದು.''

2 ''ಆಗ ನೀವು ನಿಮ್ಮ ಸಹೋದರರಿಗೆ, 'ನೀವು ನನ್ನ
ಜನರು' ಎಂದು ಹೇಳುವಿರಿ. ಮತ್ತು ನಿಮ್ಮ
ಸಹೋದರಿಯರಿಗೆ, 'ಆತನು ನಿಮ್ಮ ಮೇಲೆ ಕರುಣೆ
ಇಟ್ಟಿರುತ್ತಾನೆ' ಎಂದು ಹೇಳುವಿರಿ.

### ಇಸ್ರೇಲ್ ಜನಾಂಗದವರೊಂದಿಗೆ ಯೆಹೋವನು ಮಾತಾಡುತ್ತಾನೆ

2''ನಿನ್ನ ತಾಯಿಯೊಂದಿಗೆ ವಾದಿಸು. ಯಾಕೆಂದರೆ ಆಕೆ
ನನ್ನ ಹೆಂಡತಿಯಲ್ಲ. ನಾನು ಆಕೆಯ ಗಂಡನಲ್ಲ.
ವೇಶ್ಯೆಯ ಹಾಗೆ ಆಕೆ ವರ್ತಿಸುವದನ್ನು ನಿಲ್ಲಿಸು ಎಂದು
ಹೇಳು. ಆಕೆಯ ಸ್ತನಗಳ ಮಧ್ಯದಿಂದ ಆಕೆಯ ಮಿಂಡ
ರನ್ನು ತೆಗೆದುಹಾಕಲು ಹೇಳು. 3ಆಕೆ ವ್ಯಭಿಚಾರ ಮಾಡು
ವದನ್ನು ನಿಲ್ಲಿಸದೆ ಹೋದರೆ ನಾನು ಆಕೆಯನ್ನು ಬೆತ್ತಲೆ
ಮಾಡಿ, ಆಕೆ ಜನ್ಮ ತಾಳಿದಾಗ ಹೇಗೆ ಇದ್ದಳೋ ಹಾಗೆ
ಮಾಡುವೆನು. ಆಕೆಯ ಜನರನ್ನು ಆಕೆಯಿಂದ ತೊಲಗಿಸಿ
ಆಕೆಯನ್ನು ಒಣ ಮರುಭೂಮಿಯಂತೆ ಬೆಂಗಾಡಾಗಿ
ಮಾಡುವೆನು. ಆಕೆ ಬಾಯಾರಿ ಸಾಯುವಂತೆ ಮಾಡು
ವೆನು. 4ಆಕೆಯ ಮಕ್ಕಳನ್ನು ನಾನು ಕನಿಕರಿಸೆನು.
ಯಾಕೆಂದರೆ ಅವರು ವ್ಯಭಿಚಾರದಿಂದ ಹುಟ್ಟಿದ ಮಕ್ಕಳು.
5ಅವರ ತಾಯಿಯು ವೇಶ್ಯೆಯಂತೆ ವರ್ತಿಸಿದಳು. ತಾನು
ನಡಿಸಿದ ಕೃತ್ಯಗಳಿಗಾಗಿ ಆಕೆ ನಾಚಿಕೆಪಡಬೇಕು. ಆಕೆಯು
ಹೀಗಂದುಕೊಳ್ಳುತ್ತಿದ್ದಾಳೆ, 'ನಾನು ನನ್ನ ಮಿಂಡರ ಬಳಿಗೆ
ಹೋಗುವೆನು. ಅವರು ನನಗೆ ಅನ್ನ ನೀರನ್ನು ಕೊಡು
ವರು. ನನಗೆ ಉಣ್ಣೆಯನ್ನೂ, ನಾರು ಮಡಿಯನ್ನೂ
ಕೊಡುವರು. ದ್ರಾಕ್ಷಾರಸ ಮತ್ತು ಆಲೀವ್ ಎಣ್ಣೆಯನ್ನೂ
ಕೊಡುವರು.'

6''ಅದಕ್ಕಾಗಿ ಯೆಹೋವನಾದ ನಾನು ಇಸ್ರೇಲರ
ಮಾರ್ಗವನ್ನು ಮುಳ್ಳುಗಳಿಂದ ಮುಚ್ಚಿಬಿಡುವೆನು. ನಾನು
ಗೋಡೆಕಟ್ಟುವೆನು. ಆಗ ಅವಳು ತನ್ನ ದಾರಿಯನ್ನು ಕಂಡು
ಕೊಳ್ಳಲಾರಳು. 7ಆಕೆಯು ತನ್ನ ಮಿಂಡರ ಹಿಂದೆ ಓಡಿ
ಹೋದರೂ ಅವರನ್ನು ಹಿಡಿಯಲಾರಳು. ಆಕೆಯು ತನ್ನ
ಮಿಂಡರನ್ನು ಹುಡುಕುವಳು. ಆದರೆ ಅವರು ಆಕೆಗೆ ಸಿಗು
ವದಿಲ್ಲ. ಆಗ ಆಕೆ ಹೀಗೆ ಹೇಳುವಳು, 'ನಾನು ನನ್ನ
ಮೊದಲನೇ ಪತಿಯ ಬಳಿಗೆ (ಯೆಹೋವನು) ಹೋಗು
ವೆನು. ನಾನು ಆತನೊಂದಿಗೆ ಇದ್ದಾಗ ನನ್ನ ಜೀವತವು
ಎಷ್ಟೋ ಚೆನ್ನಾಗಿತ್ತು. ಈಗಿನ ನನ್ನ ಜೀವಿತಕ್ಕಿಂತ ಆಗಿನ
ಜೀವಿತವು ಎಷ್ಟೋ ಮೇಲಾಗಿತ್ತು.'

8''ಆಕೆಗೆ (ಇಸ್ರೇಲಿಗೆ) ನಾನು (ಯೆಹೋವನು)
ಧಾನ್ಯ, ಎಣ್ಣೆ, ದ್ರಾಕ್ಷಾರಸವನ್ನು ಕೊಟ್ಟವನೆಂದು ತಿಳಿದಿಲ್ಲ.
ಆಕೆಗೆ ಹೆಚ್ಚೆಚ್ಚಾಗಿ ಬೆಳ್ಳಿ ಬಂಗಾರಗಳನ್ನು ಕೊಡುತ್ತಾ
ಬಂದೆನು. ಆದರೆ ಆ ಬೆಳ್ಳಿ ಬಂಗಾರವನ್ನು ಇಸ್ರೇಲರು
ಬಾಳನ ವಿಗ್ರಹಗಳನ್ನು ತಯಾರಿಸಲು ಉಪಯೋಗಿಸಿ
ದರು. 9ಆದುದರಿಂದ ನಾನು ಹಿಂತಿರುಗಿ ಬರುವೆನು.
ಕೊಯ್ಲಿಗೆ ತಯಾರಾದ ನಾನು ಕೊಟ್ಟಿರುವ ಧಾನ್ಯವನ್ನು
ಅವರಿಂದ ಹಿಂದಕ್ಕೆ ತೆಗೆದುಕೊಳ್ಳುವೆನು. ದ್ರಾಕ್ಷಿಹಣ್ಣು
ಪಕ್ವವಾಗಿದ್ದಾಗ ನಾನು ಬಂದು ನನ್ನ ದ್ರಾಕ್ಷಾರಸವನ್ನು
ಹಿಂದಕ್ಕೆ ತೆಗೆದುಕೊಳ್ಳುವೆನು. ನಾನು ಕೊಟ್ಟಿರುವ ಉಣ್ಣೆ
ಮತ್ತು ನಾರಿನ ಬಟ್ಟೆಯನ್ನು ಹಿಂದಕ್ಕೆ ತೆಗೆದುಕೊಳ್ಳುವೆನು.
ನಾನು ಅದನ್ನು ಅವಳಿಗೆ ತನ್ನ ಬೆತ್ತಲೆ ಶರೀರವನ್ನು ಮುಚ್ಚಿ
ಕೊಳ್ಳುವದಕ್ಕೋಸ್ಕರ ಕೊಟ್ಟಿದ್ದೆನು. 10ಈಗ ನಾನು ಆಕೆ
ಯನ್ನು ವಿವಸ್ತ್ರಳನ್ನಾಗಿ ಮಾಡುವೆನು. ಆಕೆಯ ಬೆತ್ತಲೆತ
ನವನ್ನು ಆಕೆಯ ಮಿಂಡರೆಲ್ಲರೂ ನೋಡುವರು. ನನ್ನ
ಕೈಯೊಳಗಿಂದ ಯಾರೂ ಆಕೆಯನ್ನು ರಕ್ಷಿಸಲಾರರು.
11ನಾನು (ದೇವರು) ಆಕೆಯ ಉಲ್ಲಾಸಗಳನ್ನು ಅವಳಿಂದ
ತೆಗೆಯುವೆನು. ಆಕೆಯ ಹಬ್ಬದ ದಿನಗಳು, ಅಮವಾಸ್ಯೆಯ
ಹಬ್ಬ, ಸಬ್ಬತ್ ದಿನಗಳನ್ನು ಆಕೆಯಿಂದ ತೆಗೆದು
ಬಿಡುವೆನು. 12ಆಕೆಯ ದ್ರಾಕ್ಷಾಲತೆಗಳನ್ನೂ ಅಂಜೂರದ
ಮರಗಳನ್ನೂ ನಾಶಮಾಡುವೆನು. 'ಇವುಗಳನ್ನು ನನ್ನ
ಪ್ರೇಮಿಗಳು ನನಗೆ ಕೊಟ್ಟರು' ಎಂದು ಆಕೆ ಹೇಳುತ್ತಾಳೆ.
ಆದರೆ ನಾನು ಆಕೆಯ ತೋಟವನ್ನೇ ಬದಲಾಯಿಸು
ವೆನು. ಅದು ದಟ್ಟ ಅಡವಿಯಂತೆ ಆಗುವದು. ಅದರಲ್ಲಿದ್ದ
ಮರಗಳ ಹಣ್ಣನ್ನು ಕಾಡು ಪ್ರಾಣಿಗಳು ಬಂದು
ತಿನ್ನುವವು.

13''ಆಕೆಯು ಬಾಳನ ಸೇವೆ ಮಾಡಿದ್ದುದರಿಂದ ನಾನು
ಆಕೆಯನ್ನು ಶಿಕ್ಷಿಸುವೆನು. ಬಾಳನಿಗೆ ಆಕೆ ಧೂಪ ಹಾಕಿ
ದಳು. ಆಕೆ ವಸ್ತ್ರಾಭರಣಗಳಿಂದ ಭೂಷಿತಳಾಗಿ ಮೂಗು
ತಿಯನ್ನು ಧರಿಸಿಕೊಂಡು ತನ್ನ ಪ್ರೇಮಿಗಳ ಬಳಿಗೆ
ಹೋದಳು. ನನ್ನನ್ನು ಮರೆತುಬಿಟ್ಟಳು.'' ಇದು
ಯೆಹೋವನು ಹೇಳಿದ ಮಾತು.

14''ಆದುದರಿಂದ ನಾನು (ಯೆಹೋವನು) ಆಕೆ
ಯೊಂದಿಗೆ ಸರಸ ಸಲ್ಲಾಪವಾಡುವೆನು. ಆಕೆಯನ್ನು ಮರು
ಭೂಮಿಗೆ ನಡೆಸಿ ಆಕೆಯೊಂದಿಗೆ ನಯನುಡಿಗಳಿಂದ
ಮಾತಾಡುವೆನು. 15ಅಲ್ಲಿ ಆಕೆಗೆ ನಾನು ದ್ರಾಕ್ಷಾತೋಟ
ಗಳನ್ನು ಕೊಡುವೆನು. ಆಕೆಗೆ ಆಕೋರ್ ತಗ್ಗು ಪ್ರದೇಶ
ವನ್ನು ನಿರೀಕ್ಷೆಯ ಬಾಗಿಲಾಗಿ ಕೊಡುವೆನು. ಆಗ ಅವಳು
ತಾನು ಈಜಿಪ್ಟಿನಿಂದ ಹೊರಬಂದ ತನ್ನ ಯೌವನದ ದಿನ
ಗಳಲ್ಲಿ ಹೇಗೆ ನನ್ನ ಸಂಗಡ ಮಾತನಾಡಿದಳೋ ಹಾಗೆಯೇ
ನನ್ನೊಂದಿಗೆ ಮಾತನಾಡುವಳು.'' 16ಇವು ಯೆಹೋವನ
ಮಾತುಗಳು.

''ಆಗ ನನ್ನನ್ನು ನೀನು 'ನನ್ನ ಗಂಡ' ಎಂದು ಕರೆಯುವಿ.
'ನನ್ನ ಬಾಳನು' ಎಂದು ಕರೆಯುವದಿಲ್ಲ. 17ನಾನು
ಆಕೆಯ ಬಾಯಿಯಿಂದ ಬಾಳ್ ದೇವರುಗಳ ಹೆಸರನ್ನು

ತೆಗೆದುಬಿಡುವೆನು. ಆಮೇಲೆ ಜನರು ಎಂದಿಗೂ ಬಾಳನ
ಹೆಸರೆನ್ನೆತ್ತುವದಿಲ್ಲ.
18 ‘‘ಆ ಸಮಯದಲ್ಲಿ ನಾನು ಇಸ್ರೇಲರಿಗೋಸ್ಕರವಾಗಿ
ಅಡವಿಯ ಮೃಗಗಳೊಂದಿಗೂ, ಆಕಾಶದ ಪಕ್ಷಿಗ
ಳೊಂದಿಗೂ, ನೆಲದ ಮೇಲೆ ಹರಿದಾಡುವ ಜಂತುಗ
ಳೊಂದಿಗೂ ಒಡಂಬಡಿಕೆ ಮಾಡುವೆನು. ನಾನು ಯುದ್ಧದ
ಆಯುಧ ಬಿಲ್ಲು ಖಡ್ಗಗಳನ್ನು ತುಂಡು ಮಾಡುವೆನು. ಆ
ದೇಶದೊಳಗೆ ಯಾವ ಆಯುಧವೂ ಇರದು. ಆಗ
ಇಸ್ರೇಲಿನ ಜನರು ನಿಶ್ಚಿಂತೆಯಿಂದ ಮಲಗುವರು. 19 ಆಗ
ನಾನು (ಯೆಹೋವನು) ನಿನ್ನನ್ನು ಒಳ್ಳೆಯತನದಿಂದಲೂ
ನ್ಯಾಯದಿಂದಲೂ ಪ್ರೀತಿಯಂದಲೂ ಕರುಣೆ
ಯಿಂದಲೂ ಕೂಡಿರುವ ನಿರಂತರವಾದ ವಧುವನ್ನಾಗಿ
ಮಾಡುವೆನು. 20 ನಿನ್ನನ್ನು ನಾನು ನನ್ನ ನಂಬಿಗಸ್ತಳಾದ
ವಧುವನ್ನಾಗಿ ಮಾಡುವೆನು. ಆಗ ನೀನು ನನ್ನನ್ನು ನಿಜ
ವಾಗಿಯೂ ಅರಿತುಕೊಳ್ಳುವಿ. 21 ಆಗ ನಾನು ನಿನಗೆ
ಪ್ರತಿಕ್ರಿಯೆ ತೋರ್ಪಡಿಸುವೆನು.’’ ಇದು ಯೆಹೋವನು
ಹೇಳಿದ ಮಾತು:

‘‘ನಾನು ಆಕಾಶದೊಂದಿಗೆ ಮಾತಾಡಲು ಅದು
ಭೂಮಿಯ ಮೇಲೆ ಮಳೆಗರೆಯುವದು.
22 ಭೂಮಿಯ ಧಾನ್ಯ, ದ್ರಾಕ್ಷಾರಸ, ಎಣ್ಣೆಯನ್ನು
ಕೊಡುವದು. ಇಜ್ರೀಲಿನ ಅವಶ್ಯಕತೆಗಳನ್ನು ಅವು
ದೊರಕಿಸುವದು.
23 ಆಕೆಯ ದೇಶದಲ್ಲಿ ನಾನು ಬೀಜ ಬಿತ್ತುವೆನು.
ನಾನು ಲೋರುಹಾಮಳಿಗೆ ಕರುಣೆ ತೋರುವೆನು.
ಲೋಅಮ್ಮಿಗೆ ನಾನು, ‘‘ನೀವು ನನ್ನ ಜನರು’
ಎಂದು ಹೇಳುವೆನು. ಆಗ ಅವರು, ‘ನೀನು ನಮ್ಮ
ದೇವರು’ ಎಂದು ಹೇಳುವರು.

## ಗುಲಾಮಳಾಗಿದ್ದ ಗೋಮೆರಳನ್ನು ಹೋಶೇಯನು ಕ್ರಯಕೊಟ್ಟು ಹಿಂದಕ್ಕೆ ಪಡಕೊಂಡದ್ದು

3 ತಿರುಗಿ ಯೆಹೋವನು ನನ್ನ ಹತ್ತಿರ ಹೇಳಿ
ದ್ದೇನೆಂದರೆ, ‘‘ಗೋಮೆರಳಿಗೆ ಅನೇಕ ಪ್ರೇಮಿಗಳಿ
ದ್ದಾರೆ. ಆದರೆ ನೀನು ಆಕೆಯನ್ನು ಪ್ರೀತಿ ಮಾಡುತ್ತಲೇ
ಇರಬೇಕು. ಯಾಕೆಂದರೆ ಅದು ಯೆಹೋವನ ರೀತಿ.
ಯೆಹೋವನು ಇಸ್ರೇಲ್ ಜನರನ್ನು ಪ್ರೀತಿಸುತ್ತಲೇ
ಇದ್ದಾನೆ. ಆದರೆ ಅವರು ಅನ್ಯ ದೇವರುಗಳನ್ನು ಆರಾಧಿಸು
ತ್ತಲೇ ಇದ್ದಾರೆ. ಅವರು ಒಣದ್ರಾಕ್ಷೆಯ ಉಂಡೆಗಳನ್ನು
ತಿನ್ನಲು ಆಶಿಸುತ್ತಾರೆ. 2 ನಾನು ಹದಿನೈದು ತುಂಡು ಬೆಳ್ಳಿ
ಯನ್ನೂ ಒಂಭತ್ತು ಕ್ವಿಂಟಾಲ್ ಜವೆಗೋಧಿಯನ್ನು
ಕೊಟ್ಟು ಆಕೆಯನ್ನು ಕೊಂಡುಕೊಂಡೆನು. 3 ಬಳಿಕ ನಾನು
ಆಕೆಗೆ, ‘‘ನೀನು ನನ್ನೊಂದಿಗೆ ಅನೇಕ ದಿನಗಳವರೆಗೆ
ಮನೆಯೊಳಗೆ ಇರಬೇಕು. ನೀನು ವೇಶ್ಯೆಯಂತಿರ
ಬಾರದು. ನೀನು ಪರಪುರುಷನೊಡನೆ ಇರಬಾರದು.
ನಾನೇ ನಿನ್ನ ಗಂಡನಾಗಿರುವೆನು ಎಂದು ಹೇಳುವೆನು.’’
4 ಅದೇ ರೀತಿಯಲ್ಲಿ, ಇಸ್ರೇಲಿನ ಜನರು ಬಹಳ ದಿವಸ
ಗಳ ತನಕ ಅರಸನಾಗಲೀ, ಅಧಿಪತಿಯಾಗಲೀ ಇಲ್ಲದೆ
ಇರುವರು. ಅವರು ಯಜ್ಞವಿಲ್ಲದೆ ಇರುವರು, ಸ್ಮಾರಕ
ಸ್ತಂಭಗಳೂ ಇರುವದಿಲ್ಲ. ಅವರಲ್ಲಿ ಏಫೋದ್ ಇರುವ
ದಿಲ್ಲ; ಅಲ್ಲದೆ ಮನೆದೇವತೆಯೂ ಇರುವದಿಲ್ಲ. 5 ಹೀಗೆ
ಇದ್ದ ಬಳಿಕ ಇಸ್ರೇಲರು ಹಿಂತಿರುಗಿ ಬರುವರು. ಆಗ
ಅವರು ತಮ್ಮ ದೇವರಾದ ಯೆಹೋವನನ್ನೂ ಅವರ ಅರಸ
ನಾದ ದಾವೀದನನ್ನೂ ಹುಡುಕುವರು. ಕೊನೆಯ ದಿವಸ
ಗಳಲ್ಲಿ ತಮ್ಮ ದೇವರಾದ ಯೆಹೋವನನ್ನೂ ಆತನ
ಒಳ್ಳೆತನವನ್ನೂ ಗೌರವಿಸಲು ಬರುವರು.

## ಇಸ್ರೇಲರ ಮೇಲೆ ಯೆಹೋವನು ಕೋಪಗೊಂಡಿದ್ದಾನೆ

4 ಇಸ್ರೇಲ್ ಜನರೇ, ಯೆಹೋವನ ಮಾತಿಗೆ
ಕಿವಿಗೊಡಿರಿ! ಈ ದೇಶದಲ್ಲಿ ವಾಸಿಸುವ ಜನರ
ವಿರುದ್ಧವಾಗಿ ಯೆಹೋವನು ತನ್ನ ವಾದವನ್ನು ಅವರ
ಮುಂದಿಡುತ್ತಾನೆ. ‘‘ಈ ದೇಶದಲ್ಲಿರುವ ಜನರು,
ಯೆಹೋವನನ್ನು ನಿಜವಾಗಿಯೂ ತಿಳಿದಿಲ್ಲ. ಅವರು
ಯೆಹೋವನಿಗೆ ಸತ್ಯವಂತರೂ ಅಲ್ಲ, ನಿಷ್ಠಾವಂತರೂ
ಅಲ್ಲ. 2 ಜನರು ಆಣೆ ಇಟ್ಟುಕೊಳ್ಳುತ್ತಾರೆ, ಸುಳ್ಳನ್ನಾಡು
ತ್ತಾರೆ, ಕೊಲೆ ಮಾಡುತ್ತಾರೆ ಮತ್ತು ಸೂರೆ ಮಾಡುತ್ತಾರೆ.
ಅವರು ವ್ಯಭಿಚಾರವೆಂಬ ಪಾಪಗಳನ್ನು ಮಾಡುತ್ತಾರೆ.
ಅದುದರಿಂದ ಅವರು ಮಕ್ಕಳನ್ನು ಹುಟ್ಟಿಸುತ್ತಾರೆ. ಜನರು
ತಿರುಗಿ ತಿರುಗಿ ಕೊಲೆ ಮಾಡುತ್ತಾರೆ. 3 ಹೀಗೆ ದೇಶವು
ಸತ್ತವರಿಗಾಗಿ ಗೋಳಾಡುವ ಮನುಷ್ಯನಂತಿರುವದು.
ಆದುದರಿಂದ ಅದರ ಜನರೆಲ್ಲಾ ಬಲಹೀನರಾಗುತ್ತಾರೆ.
ಅಡವಿಯಲ್ಲಿರುವ ಪ್ರಾಣಿಗಳೂ, ಆಕಾಶದ ಪಕ್ಷಿಗಳೂ,
ಸಮುದ್ರದಲ್ಲಿರುವ ಮೀನುಗಳೂ ಸಾಯುತ್ತಿವೆ.
4 ಯಾರೂ ಪರಸ್ಪರ ವಾದಿಸದೆ ತಪ್ಪು ಹೊರಿಸದೆ ಇರ
ಬೇಕು. ಯಾಜಕರೇ, ನಿಮ್ಮೊಂದಿಗೆ ನಾನು ವಾದಿಸುತ್ತೇನೆ.
5 ನೀವು (ಯಾಜಕರು) ಹಗಲಿನಲ್ಲಿ ಬಿದ್ದು ಹೋಗುವಿರಿ.
ರಾತ್ರಿ ಹೊತ್ತಿನಲ್ಲಿ ಪ್ರವಾದಿಯೂ ನಿಮ್ಮ ಜೊತೆಗೆ ಬೀಳು
ವನು ಮತ್ತು ನಾನು ನಿಮ್ಮ ತಾಯಿಯನ್ನು ನಾಶ
ಮಾಡುವೆನು.
6 ‘‘ನನ್ನ ಜನರು ಅಜ್ಞಾನಿಗಳಾಗಿರುವದರಿಂದ ಅವರು
ನಾಶವಾಗುವರು, ನೀವು ಕಲಿಯಲು ನಿರಾಕರಿಸುತ್ತೀರಿ.
ಆದುದರಿಂದ ನೀವು ನನ್ನ ಯಾಜಕರಾಗಿರಲು ನಾನು
ನಿರಾಕರಿಸುತ್ತೇನೆ. ನಿಮ್ಮ ದೇವರ ಕಟ್ಟಳೆಗಳನ್ನು ನೀವು
ಮರೆತುಬಿಟ್ಟಿರುವಿರಿ. ಆದುದರಿಂದ ನಾನು ನಿಮ್ಮ

ಮಕ್ಕಳನ್ನು ಮರೆತುಬಿಡುವೆನು. 7ಅವರು ಅಹಂಕಾರಿಗ
ಳಾದರು. ನನ್ನ ವಿರುದ್ಧವಾಗಿ ಹೆಚ್ಚೆಚ್ಚಾಗಿ ಪಾಪ
ಮಾಡಿದರು. ಆದುದರಿಂದ ಅವರ ಗೌರವವನ್ನು ನಾನು
ಲಜ್ಜಾಸ್ಪದವನ್ನಾಗಿ ಮಾಡುವೆನು.
8“ಜನರ ಪಾಪದೊಂದಿಗೆ ಯಾಜಕರೂ ಒಂದಾದರು.
ಅವರು ಹೆಚ್ಚುಹೆಚ್ಚು ಪಾಪಗಳನ್ನು ಮಾಡಲು ಆಶಿಸಿದರು.
9ಯಾಜಕರು ಸಾಮಾನ್ಯ ಜನರಿಂದ ಬೇರೆ ಆಗಿರಲಿಲ್ಲ.
ಅವರು ಮಾಡಿದ ಪಾಪಗಳಿಗಾಗಿ ಅವರನ್ನು ನಾನು ಶಿಕ್ಷಿಸು
ವೆನು ಕೆಟ್ಟ ಕೆಲಸವನ್ನು ಮಾಡಿದ್ದಕ್ಕೆ ಅವರಿಗೆ ಪ್ರತಿಫಲ
ಕೊಡುವೆನು. 10ಅವರು ತಿನ್ನುವರು ಆದರೆ ಅವರು ತೃಪ್ತಿ
ಹೊಂದುವದಿಲ್ಲ. ಅವರು ಲೈಂಗಿಕ ಪಾಪ ಮಾಡುವರು
ಆದರೆ ಅವರಿಗೆ ಮಕ್ಕಳಾಗುವದಿಲ್ಲ. ಕಾರಣ ಏನಂದರೆ
ಅವರು ಯೆಹೋವನನ್ನು ತೊರೆದು ವೇಶ್ಯೆಯರಂತೆ
ವರ್ತಿಸಿದರು.
11“ಲೈಂಗಿಕ ಪಾಪ, ಗಡುಸಾದ ಮದ್ಯ ಮತ್ತು ಹೊಸ
ದ್ರಾಕ್ಷಾರಸ ಇವುಗಳಿಂದ ವಿಚಾರ ಪ್ರಜ್ಞೆಯನ್ನು ಕಳೆದು
ಕೊಳ್ಳುವರು. 12ನನ್ನ ಜನರು ಮರದ ತುಂಡುಗಳಿಂದ
ಸಲಹೆಗಳನ್ನು ಕೇಳುವರು. ಆ ಮರದ ತುಂಡುಗಳು ಅವ
ರಿಗೆ ಉತ್ತರಿಸುವವು ಎಂದು ಅವರು ನೆನಸುತ್ತಾರೆ.
ಯಾಕೆಂದರೆ, ವೇಶ್ಯೆಯರಂತೆ ಅವರು ಆ ಸುಳ್ಳು ದೇವರು
ಗಳನ್ನು ಹಿಂದಟ್ಟಿಕೊಂಡು ಹೋಗುವರು. ಅವರು ತಮ್ಮ
ದೇವರುಗಳನ್ನು ಬಿಟ್ಟು ವೇಶ್ಯೆಯರಂತೆ ವರ್ತಿಸುತ್ತಾರೆ.
13ಅವರು ಪರ್ವತ ಶಿಖರಗಳ ಮೇಲೆ ಯಜ್ಞಗಳನ್ನರ್ಪಿಸು
ತ್ತಾರೆ; ಬೆಟ್ಟಗಳ ಮೇಲೆಯೂ ಓಕ್, ಪಾಪಲಾರ್ ಮತ್ತು
ಏಲ್ಮ್ ಮರಗಳಡಿಗಳಲ್ಲಿಯೂ ಧೂಪ ಹಾಕುತ್ತಾರೆ. ಆ
ಮರಗಳ ನೆರಳು ದಟ್ಟವಾಗಿರುವದು. ಆದುದರಿಂದ ನಿಮ್ಮ
ಹೆಣ್ಣು ಮಕ್ಕಳು ವೇಶ್ಯೆಯರಂತೆ ಅದರಡಿಯಲ್ಲಿ ಮಲಗು
ವರು. ನಿಮ್ಮ ಸೊಸೆಯಂದಿರು ಲೈಂಗಿಕ ಪಾಪದಲ್ಲಿ ಮಗ್ನ
ರಾಗಿರುವರು. 14“ನಿಮ್ಮ ಹೆಣ್ಣು ಮಕ್ಕಳು ಸೂಳೆತನ
ಮಾಡುವದಕ್ಕಾಗಲೀ, ನಿಮ್ಮ ಸೊಸೆಯರು ಲೈಂಗಿಕ ಪಾಪ
ಮಾಡುವದಕ್ಕಾಗಲೀ ನಾನು ಅವರನ್ನು ದೂರುವದಿಲ್ಲ.
ಗಂಡಸರು ವೇಶ್ಯೆಯರೊಂದಿಗೆ ಮಲಗುವರು. ಅವರು
ಮಂದಿರದ ವೇಶ್ಯೆಯರೊಂದಿಗೆ ಯಜ್ಞವನ್ನರ್ಪಿಸುವರು.
ಹೀಗೆ ಆ ಬುದ್ಧಿಯಿಲ್ಲದ ಜನರು ತಮ್ಮನ್ನು ತಾವೇ ನಾಶ
ಮಾಡಿಕೊಳ್ಳುತ್ತಾರೆ.

### ಇಸ್ರೇಲಿನ ಲಜ್ಜಾಸ್ಪದವಾದ ಪಾಪಗಳು

15“ಇಸ್ರೇಲೇ, ನೀನು ಸೂಳೆಯಂತೆ ವರ್ತಿಸುತ್ತೀ.
ಆದರೆ ಯೆಹೂದವನ್ನು ತಪ್ಪಿದಸ್ಥಳನ್ನಾಗಿ ಮಾಡಬೇಡ.
ಗಿಲ್ಗಾಲಿಗಾಗಲೀ ಬೇತಾವೆನಿಗಾಗಲೀ ಹೋಗದಿರು.
ಯೆಹೋವನ ಮೇಲೆ ಆಣೆ ಇಡಬೇಡ. ‘ಯೆಹೋವ
ನಾಣೆ’ ಎಂದು ಹೇಳಬೇಡ. 16ಇಸ್ರೇಲಿಗೆ ಅನೇಕ ಸಂಗತಿ
ಗಳನ್ನು ಯೆಹೋವನು ಕೊಟ್ಟಿರುತ್ತಾನೆ. ಆತನು ಕುರಿ
ಗಳನ್ನು ವಿಶಾಲವಾದ ಮತ್ತು ಹುಲುಸಾದ ಹುಲ್ಲುಗಾವ
ಲಿಗೆ ಒಯ್ಯುವ ಕುರುಬನಂತಿದ್ದಾನೆ. ಆದರೆ ಇಸ್ರೇಲ್
ಹಠಮಾರಿಯಾಗಿರುತ್ತದೆ. ಬಾರಿಬಾರಿಗೆ ಹೊರಗೆ
ಓಡುವ ಕಡಸಿನಂತಿದೆ. 17ಅವನ ವಿಗ್ರಹಗಳೊಂದಿಗೆ
ಎಫ್ರಾಯೀಮು ಸೇರಿರುತ್ತಾನೆ. ಆದುದರಿಂದ ಅವನನ್ನು
ಸುಮ್ಮನೆ ಬಿಟ್ಟುಬಿಡು.
18“ಅವರು ಅಮಲೇರಿದ ಮೇಲೆ ಸೂಳೆಯರಂತೆ
ವರ್ತಿಸುತ್ತಾರೆ. ಅವರು ಲಂಚವನ್ನು ಪ್ರೀತಿಸುತ್ತಾರೆ ಮತ್ತು
ಲಂಚಕೊಡುವಂತೆ ಒತ್ತಾಯ ಮಾಡುತ್ತಾರೆ. ಆ ಅಧಿಪತಿ
ಗಳು ತಮ್ಮ ಜನರ ಮೇಲೆ ಅಪಮಾನ ಬರಮಾಡುತ್ತಾರೆ.
19ಅವರು ತಮ್ಮ ಭದ್ರತೆಗಾಗಿ ಆ ದೇವರುಗಳ ಬಳಿಗೆ
ಹೋದರು ಮತ್ತು ತಮ್ಮ ಯೋಚನೆ ಮಾಡುವ ಶಕ್ತಿ
ಯನ್ನೇ ಕಳಕೊಂಡರು. ಅವರ ಧೂಪಹೋಮಗಳೇ
ಅವರನ್ನು ನಾಚಿಕೆಗೆ ಗುರಿಪಡಿಸುವವು.”

### ಇಸ್ರೇಲ್ ಮತ್ತು ಯೆಹೂದವು ಪಾಪದಲ್ಲಿ ಬೀಳಲು ಅವರ ನಾಯಕರೇ ಕಾರಣ

5 “ಯಾಜಕರೇ, ಇಸ್ರೇಲ್ ಜನಾಂಗವೇ, ಅರಸನ
ಪರಿವಾರದವರೇ, ನನ್ನ ಮಾತುಗಳಿಗೆ ಕಿವಿಗೊಡಿರಿ.
ಯಾಕೆಂದರೆ ನಿಮಗೆ ನ್ಯಾಯತೀರ್ಪು ಬಂದಿದೆ.
“ಮಿಚ್ಪದಲ್ಲಿ ನೀವು ಉರುಲಿನಂತೆ ಇದ್ದಿರಿ. ತಾಬೋರಿ
ನಲ್ಲಿ ನೆಲದ ಮೇಲೆ ಹರಡಿಸಿದ್ದ ಬಲೆಯಂತೆ ಇದ್ದಿರಿ.
2ನೀವು ಅನೇಕಾನೇಕ ಕೆಟ್ಟ ಸಂಗತಿಗಳನ್ನು ಮಾಡಿದ್ದೀರಿ.
ಆದುದರಿಂದ ನಿಮ್ಮೆಲ್ಲರನ್ನು ನಾನು ಶಿಕ್ಷಿಸುತ್ತೇನೆ.
3ಎಫ್ರಾಯೀಮೇ, ನನಗೆ ಗೊತ್ತುಂಟು. ಇಸ್ರೇಲ್
ಮಾಡಿದ ವಿಷಯಗಳೆಲ್ಲವನ್ನು ನಾನು ಬಲ್ಲೆನು.
ಎಫ್ರಾಯೀಮೇ, ನೀನು ಈಗಲೂ ಸೂಳೆಯಂತೆ ವರ್ತಿಸು
ತ್ತಿರುವಿ. ತನ್ನ ಪಾಪಗಳಿಂದ ಇಸ್ರೇಲ್ ಮಲಿನವಾಗಿದೆ.
4ಇಸ್ರೇಲಿನ ಜನರು ಅನೇಕ ದುಷ್ಟಕಾರ್ಯಗಳನ್ನು ಮಾಡಿ
ದ್ದಾರೆ. ಆ ದುಷ್ಟಕಾರ್ಯಗಳು ಅವರನ್ನು ತಮ್ಮ ದೇವರ
ಬಳಿಗೆ ಹಿಂತಿರುಗಿ ಬಾರದಂತೆ ಮಾಡುತ್ತಿವೆ. ಅವರು
ಯಾವಾಗಲೂ ಇತರ ದೇವರುಗಳ ಹಿಂದೆ ಹೇಗೆ
ಹೋಗಲಿ ಎಂದು ಮಾರ್ಗವನ್ನು ಹುಡುಕುತ್ತಿದ್ದಾರೆ.
ಅವರಿಗೆ ಯೆಹೋವನ ಪರಿಚಯವಿಲ್ಲ. 5ಇಸ್ರೇಲಿನ
ಹೆಮ್ಮೆಯು ಅವರಿಗೆ ವಿರುದ್ಧವಾಗಿ ಸಾಕ್ಷಿನೀಡುತ್ತದೆ.
ಇಸ್ರೇಲ್ ಮತ್ತು ಎಫ್ರಾಯೀಮ್ ತಮ್ಮ ಪಾಪಗಳಿಂದಲೇ
ಮುಗ್ಗರಿಸುವರು. ಯೆಹೂದವೂ ಅವರೊಂದಿಗೆಯೇ
ಮುಗ್ಗರಿಸುವದು.
6“ಜನರ ನಾಯಕರು ಯೆಹೋವನನ್ನು ಹುಡುಕಾಡು
ವರು. ಅವರು ತಮ್ಮ ಕುರಿದನಗಳನ್ನು ತಮ್ಮೊಂದಿಗೆ
ತೆಗೆದುಕೊಂಡು ಹೋಗುವರು. ಆದರೆ ಅವರು

ಯೆಹೋವನನ್ನು ಕಂಡುಕೊಳ್ಳುವದಿಲ್ಲ. ಯಾಕೆಂದರೆ
ಆತನು ಅವರನ್ನು ಬಿಟ್ಟು ಹೋಗಿರುತ್ತಾನೆ. [7]ಅವರು
ಯೆಹೋವನಿಗೆ ನಂಬಿಗಸ್ತರಾಗಿರಲಿಲ್ಲ. ಅವರ ಮಕ್ಕಳು
ಅನ್ಯರಿಗೆ ಹುಟ್ಟಿದ್ದಾರೆ. ಆದುದರಿಂದ ಈಗ ಆತನು ಅವ
ರನ್ನೂ ಅವರ ದೇಶವನ್ನೂ ತಿರುಗಿ ನಾಶಮಾಡುವನು.''

### ಇಸ್ರೇಲಿನ ನಾಶನದ ಪ್ರವಾದನೆ

8 ''ಗಿಬ್ಯದಲ್ಲಿ ಕೊಂಬನ್ನೂದು, ರಾಮದಲ್ಲಿ ತುತೂರಿಯನ್ನೂದು. ಬೇತಾವೆನಿನಲ್ಲಿ ಎಚ್ಚರಿಕೆಯನ್ನು ನೀಡು, ಬೆನ್ಯಾಮೀನನೇ, ವೈರಿಯು ನಿನ್ನ ಹಿಂದೆಯೇ ಇದ್ದಾನೆ.

9 ಶಿಕ್ಷೆಯು ವಿಧಿಸಲ್ಪಡುವಾಗ ಎಫ್ರಾಯೀಮ್ ಬರಿದಾಗುವದು. ಇದು ಖಂಡಿತವಾಗಿಯೂ ನೆರವೇರುವದೆಂದು ಯೆಹೋವನಾದ ನಾನು ಇಸ್ರೇಲ್ ಕುಟುಂಬಗಳಿಗೆ ತಿಳಿಸುತ್ತಿದ್ದೇನೆ.

10 ಯೆಹೂದದ ನಾಯಕರು ಪರರ ಆಸ್ತಿಯನ್ನು ದೋಚುವ ಕಳ್ಳರಂತಿದ್ದಾರೆ. ಯೆಹೋವನಾದ ನಾನು ಅವರ ಮೇಲೆ ನನ್ನ ಕೋಪವನ್ನು ನೀರಿನಂತೆ ಸುರಿಸುವೆನು.

11 ಎಫ್ರಾಯೀಮ್ ಶಿಕ್ಷಿಸಲ್ಪಡುವನು. ಅವನು ದ್ರಾಕ್ಷಾಹಣ್ಣಿನಂತೆ ನಜ್ಜುಗುಜ್ಜಾಗುವನು. ಕಾರಣವೇನಂದರೆ, ಅವನು ಹೊಲಸನ್ನು ಹಿಂಬಾಲಿಸಲು ತೀರ್ಮಾನಿಸಿದ್ದಾನೆ.

12 ನಾನು ಎಫ್ರಾಯೀಮನನ್ನು ನಾಶಮಾಡುವೆನು, ನುಸಿಯು ಬಟ್ಟೆಯನ್ನು ನಾಶಮಾಡುವ ರೀತಿಯಲ್ಲಿ. ಮರದ ತುಂಡನ್ನು ಗೆದ್ದಲು ನಾಶಮಾಡುವಂತೆ ಯೆಹೂದವನ್ನು ನಾಶಮಾಡುವೆನು.

13 ಎಫ್ರಾಯೀಮು ತನ್ನ ವ್ಯಾಧಿಯನ್ನು ನೋಡಿತು. ಮತ್ತು ಯೆಹೂದವು ತನ್ನ ಗಾಯಗಳನ್ನು ನೋಡಿತು. ಆಮೇಲೆ ಸಹಾಯಕ್ಕಾಗಿ ಅಶ್ಶೂರ್ಯರ ಬಳಿಗೆ ಹೋದರು. ಆ ಮಹಾ ಅರಸನ ಮುಂದೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರು. ಆದರೆ ಆ ಅರಸನು ನಿಮ್ಮನ್ನು ಗುಣಮಾಡಾನು. ನಿಮ್ಮ ಗಾಯಗಳನ್ನು ಗುಣ ಮಾಡಲು ಸಾಧ್ಯವಿಲ್ಲ.

14 ಯಾಕೆಂದರೆ ನಾನು ಎಫ್ರಾಯೀಮನಿಗೆ ಸಿಂಹದಂತಿರುವೆನು. ಯೆಹೂದ ಜನಾಂಗದವರಿಗೆ ನಾನು ಪ್ರಾಯದ ಸಿಂಹದಂತಿರುವೆನು. ಹೌದು, ಯೆಹೋವನಾದ ನಾನು ಅವರನ್ನು ಹರಿದು ಚೂರು ಚೂರಾಗಿ ಮಾಡುವೆನು. ನಾನು ಅವರನ್ನು ಎತ್ತಿಕೊಂಡು ಹೋಗುವೆನು. ಯಾರೂ ಅವರನ್ನು ನನ್ನಿಂದ ರಕ್ಷಿಸಲಾರರು.

15 ಜನರು ತಮ್ಮ ದೋಷವನ್ನು ಒಪ್ಪಿಸಿಕೊಳ್ಳುವ ತನಕ ನಾನು ನನ್ನ ಸ್ಥಳಕ್ಕೆ ಹೋಗುವೆನು, ಅವರು ನನ್ನನ್ನು ಹುಡುಕುವರು. ಹೌದು ತಮ್ಮ ಸಂಕಟಗಳಲ್ಲಿ ನನ್ನನ್ನು ಹುಡುಕಲು ಅತಿಯಾಗಿ ಪ್ರಯತ್ನಿಸುವರು.''

### ಯೆಹೋವನ ಬಳಿಗೆ ಹಿಂದಿರುಗಿ ಬರುವಾಗ ದೊರಕುವ ಬಹುಮಾನ

6 'ಬನ್ನಿರಿ, ನಾವು ಯೆಹೋವನ ಬಳಿಗೆ ಹಿಂತಿರುಗೋಣ. ಆತನು ನಮಗೆ ಗಾಯ ಮಾಡಿದರೂ ಗುಣ ಮಾಡುವನು. ನಮ್ಮ ಗಾಯಗಳಿಗೆ ಬಟ್ಟೆಯನ್ನು ಸುತ್ತುವನು.

2 ಎರಡು ದಿವಸಗಳ ತರುವಾಯ ನಮ್ಮನ್ನು ತಿರುಗಿ ಜೀವಂತ ಮಾಡುವನು. ಮೂರನೇ ದಿವಸದಲ್ಲಿ ನಮ್ಮನ್ನು ಎಬ್ಬಿಸುವನು. ಆಗ ನಾವು ಆತನ ಸಮೀಪದಲ್ಲಿ ವಾಸಿಸಬಹುದು.

3 ಯೆಹೋವನ ವಿಷಯವಾಗಿ ನಾವು ಕಲಿಯೋಣ. ಆತನನ್ನು ಅರಿತುಕೊಳ್ಳಲು ಅತಿಯಾಗಿ ಪ್ರಯತ್ನಿಸೋಣ. ಸೂರ್ಯೋದಯ ಆಗುತ್ತದೆಯೆಂಬುದು ನಮಗೆ ಗೊತ್ತಿರುವಂತೆಯೇ ಆತನು ಬರುವುದೂ ನಮಗೆ ಗೊತ್ತಿದೆ. ವಸಂತಕಾಲದ ಮಳೆಯಂತೆ ಯೆಹೋವನು ಬರುವನು.''

### ಜನರು ನಿಷ್ಠಾವಂತರಲ್ಲ

4 ''ಎಫ್ರಾಯೀಮೇ, ನಿನಗೆ ನಾನು ಏನು ಮಾಡಲಿ? ಯೆಹೂದವೇ, ನಿನಗೆ ನಾನು ಏನು ಮಾಡಬೇಕು? ನಿನ್ನ ನಂಬಿಗಸ್ತಿಕೆಯು ಮುಂಜಾನೆಯ ಮಂಜಿನಂತಿದೆ, ನಿನ್ನ ನಂಬಿಗಸ್ತಿಕೆಯು ಇಬ್ಬನಿಯಂತಿದೆ. ಅದು ಬೇಗನೆ ಇಲ್ಲದೆ ಹೋಗುವದು.

5 ನಾನು ಪ್ರವಾದಿಗಳ ಮೂಲಕ ಜನರಿಗೆ ಕಟ್ಟಳೆಗಳನ್ನು ವಿಧಿಸಿದೆನು. ನನ್ನ ಅಪ್ಪಣೆಯ ಮೇರೆಗೆ ಜನರು ಕೊಲ್ಲಲ್ಪಟ್ಟರು.

6 ಯಾಕಂದರೆ ನನಗೆ ವಿಧೇಯತೆಯಿಂದ ಕೂಡಿದ ಪ್ರೀತಿಯು ಬೇಕೇ ಹೊರತು ಯಜ್ಞವಲ್ಲ. ಜನರು ತರುವ ಸರ್ವಾಂಗಹೋಮಗಳಿಗಿಂತಲೂ ಅವರು ನನ್ನನ್ನು (ದೇವರನ್ನು) ತಿಳಿದುಕೊಳ್ಳಬೇಕೆಂಬುದೇ ನನಗೆ ಇಷ್ಟ.

7 ಆದರೆ ಜನರು ಆದಾಮನಂತೆ ಒಡಂಬಡಿಕೆಯನ್ನು ಮುರಿದುಹಾಕಿದರು. ಅವರ ದೇಶದಲ್ಲಿ ಅವರು ನನಗೆ ದ್ರೋಹಿಗಳಾದರು.

8 ಗಿಲ್ಯಾದು ಕೆಟ್ಟತನವನ್ನು ನಡಿಸುವ ಜನರಿಂದ ಕೂಡಿದ ನಗರವಾಗಿದೆ. ಜನರು ಇತರರನ್ನು ಮೋಸಗೊಳಿಸಿ ಕೊಲೆ ಮಾಡಿರುತ್ತಾರೆ.
9 ಕಳ್ಳರು ದಾರಿಯಲ್ಲಿ ಹೊಂಚು ಹಾಕುತ್ತಾ ಜನರನ್ನು ಸೂರೆ ಮಾಡಲು ಕಾಯುತ್ತಿರುತ್ತಾರೆ. ಅದೇ ರೀತಿಯಲ್ಲಿ ಶೆಕೆಮಿಗೆ ಹೋಗುವ ದಾರಿಯಲ್ಲಿ ಯಾಜಕರು ಕಾಯುತ್ತಾ, ಹೋಗುತ್ತಾ ಇರುವ ಜನರ ಮೇಲೆ ಬೀಳುವರು. ಅವರು ದುಷ್ಟಕಾರ್ಯಗಳನ್ನು ಮಾಡಿರುತ್ತಾರೆ.
10 ಇಸ್ರೇಲ್ ಜನಾಂಗದಲ್ಲಿ ಅತೀ ಭಯಂಕರ ಸಂಗತಿಗಳನ್ನು ನಾನು ನೋಡಿರುತ್ತೇನೆ. ಎಫ್ರಾಯೀಮು ದೇವರಿಗೆ ದ್ರೋಹಿಯಾದನು. ಇಸ್ರೇಲು ಪಾಪದಿಂದ ಹೊಲಸಾಗಿದೆ.
11 ಯೆಹೂದವೇ, ನಿನಗೆ ಸುಗ್ಗೀಕಾಲವು ನೇಮಕವಾಗಿದೆ, ಸೆರೆವಾಸದಿಂದ ನನ್ನ ಜನರನ್ನು ನಾನು ಕರೆತಂದಾಗ ಅದು ಆಗುವದು.''ನಾನು ಇಸ್ರೇಲನ್ನು ಗುಣಪಡಿಸುವೆನು.

7 ಆಗ ಎಫ್ರಾಯೀಮನು ಪಾಪ ಮಾಡಿದ್ದಾನೆಂದು ಜನರಿಗೆ ತಿಳಿದುಬರುವದು. ಜನರಿಗೆ ಸಮಾರ್ಯದವರ ಸುಳ್ಳು ತಿಳಿದುಬರುವದು. ಆ ನಗರದಲ್ಲಿ ಕಳ್ಳರು ಬರುತ್ತಾ ಹೋಗುತ್ತಾ ಇರುವದನ್ನು ಜನರು ತಿಳಿಯುವರು.
2 ನಾನು ಅವರ ದುಷ್ಟತ್ವವನ್ನು ನೆನಪಿನಲ್ಲಿಟ್ಟಿರುತ್ತೇನೆಂಬುದನ್ನು ಅವರು ನಂಬುವದಿಲ್ಲ. ಅವರು ಮಾಡಿದ ದುಷ್ಟತನವು ಸುತ್ತಲೂ ಕಾಣಿಸುವದು. ನಾನು ಅವರ ಪಾಪಗಳನ್ನು ಸ್ಪಷ್ಟವಾಗಿ ನೋಡುತ್ತೇನೆ.
3 ಅವರ ದುಷ್ಟತನವು ಅವರ ಅರಸನನ್ನು ಸಂತಸಗೊಳಿಸುವವು. ಅವರ ಸುಳ್ಳುಗಳು ಅವರ ನಾಯಕರನ್ನು ಸಂತೋಷಪಡಿಸುತ್ತವೆ.
4 ರೊಟ್ಟಿಯನ್ನು ಸುಡಲು ರೊಟ್ಟಿಗಾರನು ಹಿಟ್ಟನ್ನು ನಾದುವನು. ರೊಟ್ಟಿಯು ಶಾಖದಿಂದ ಉಬ್ಬುತ್ತಿರುವಾಗ ರೊಟ್ಟಿಗಾರನು ಒಲೆಯನ್ನು ಮತ್ತಷ್ಟು ಉರಿಸುವುದಿಲ್ಲ. ಇಸ್ರೇಲರಾದರೊ ಹಾಗಲ್ಲ, ಅವರು ಒಲೆಯನ್ನು ಮತ್ತಷ್ಟು ಉರಿಸುತ್ತಾರೆ.
5 ನಮ್ಮ ಅರಸನ ದಿವಸದಲ್ಲಿ ಅವರು ಬೆಂಕಿಯನ್ನು ಹೆಚ್ಚಿಸುವರು. ಅವರು ಕುಡಿಯುವ ಸಮಾರಂಭವನ್ನು ಏರ್ಪಡಿಸುವರು. ನಾಯಕರು ದ್ರಾಕ್ಷಾರಸದ ಉಷ್ಣದಿಂದ ರೋಗಗ್ರಸ್ತರಾಗಿದ್ದಾರೆ. ಅರಸನು ಜನರೊಂದಿಗೆ ಸೇರಿ ದೇವರನ್ನು ಗೇಲಿಮಾಡಿ ನಗಾಡುವನು.
6 ಜನರು ಗುಪ್ತವಾಗಿ ಯೋಜನೆಯನ್ನು ತಯಾರಿಸುವರು. ಉರಿಯುವ ಒಲೆಯಂತೆ ಅವರ ಹೃದಯವು ಉತ್ಸಾಹಗೊಳ್ಳುವುದು. ಅವರ ಉತ್ಸಾಹವು ರಾತ್ರಿಯೆಲ್ಲಾ ಉರಿಯುವುದು. ಅದು ಮುಂಜಾನೆಯಲ್ಲಿ ಧಗಧಗಿಸುವ ಬೆಂಕಿಯ ಕಾವಿನಂತಿರುವದು.
7 ಅವರು ಬಿಸಿ ಮಾಡಲ್ಪಟ್ಟ ಕುಲುಮೆಯಂತಿರುವರು. ಅವರು ತಮ್ಮನ್ನು ಆಳುವವರನ್ನು ನಾಶಮಾಡಿದರು. ಅವರ ರಾಜರುಗಳೆಲ್ಲಾ ಬಿದ್ದುಹೋದರು. ಅವರಲ್ಲಿ ಒಬ್ಬರಾದರೂ ಸಹಾಯಕ್ಕಾಗಿ ನನಗೆ ಮೊರೆಯಿಡಲಿಲ್ಲ.''

### ತಾನು ನಾಶವಾಗುತ್ತೇನೆಂದು ಇಸ್ರೇಲಿಗೆ ಗೊತ್ತಿಲ್ಲ

8 ''ಎಫ್ರಾಯೀಮು ಬೇರೆ ದೇಶಗಳೊಂದಿಗೆ ಬೆರೆತು ಹೋಗುತ್ತದೆ. ಎಫ್ರಾಯೀಮು ತಿರುವಿ ಹಾಕದ ಚಪಾತಿಯಂತಿದೆ.
9 ಅನ್ಯರು ಎಫ್ರಾಯೀಮನ ಶಕ್ತಿಯನ್ನು ಮುರಿಯುವರು. ಆದರೆ ಅವನಿಗೆ ಅದು ತಿಳಿದಿರುವದಿಲ್ಲ. ಎಫ್ರಾಯೀಮನ ತಲೆಯಲ್ಲಿ ನರೆಗೂದಲು ಬಂದಾಗ್ಯೂ ಅದಕ್ಕೆ ತಿಳಿವಳಿಕೆ ಬಂದಿರುವುದಿಲ್ಲ.
10 ಎಫ್ರಾಯೀಮನ ಹೆಮ್ಮೆಯು ಅವನಿಗೆ ವಿರುದ್ಧವಾಗಿ ಸಾಕ್ಷಿ ಕೊಡುತ್ತದೆ. ಜನರಿಗೆ ನಾನಾ ತರದ ಸಂಕಟಗಳು ಬಂದಾಗ್ಯೂ ಅವರು ತಮ್ಮ ದೇವರಾದ ಯೆಹೋವನ ಬಳಿಗೆ ಹೋಗಲಿಲ್ಲ. ಜನರು ತಮ್ಮ ಸಹಾಯಕ್ಕಾಗಿ ಆತನಿಗೆ ಮೊರೆಯಿಡಲಿಲ್ಲ.
11 ಹೀಗೆ ಎಫ್ರಾಯೀಮ್ ತಿಳುವಳಿಕೆ ಇಲ್ಲದ ಮೂರ್ಖ ಪಾರಿವಾಳದಂತಾಗಿದೆ. ಜನರು ಸಹಾಯಕ್ಕಾಗಿ ಈಜಿಪ್ಟನ್ನು ಕರೆದರು, ಅಶ್ಶೂರ್ಯದ ಕಡೆಗೆ ಓಡಿದರು.
12 ಅವರು ಆ ದೇಶಗಳಿಗೆ ಹೋಗುವಾಗ ನಾನು ಅವರನ್ನು ಉರುಲಿನೊಳಗೆ ಸಿಕ್ಕಿಸುವೆನು. ನನ್ನ ಬಲೆಯನ್ನು ಅವರ ಮೇಲೆ ಬೀಸುವೆನು. ಆಕಾಶದ ಪಕ್ಷಿಗಳ ರೀತಿಯಲ್ಲಿ ಅವರನ್ನು ಕೆಳಗೆ ಬೀಳಿಸುವೆನು. ಅವರು ಮಾಡಿದ ಒಪ್ಪಂದಕ್ಕಾಗಿ ನಾನು ಅವರನ್ನು ಶಿಕ್ಷಿಸುವೆನು.
13 ಅವರು ನನ್ನನ್ನು ಬಿಟ್ಟು ತೊಲಗಿದರು. ಇದು ಅವರಿಗೆ ಕೆಡುಕು ಉಂಟುಮಾಡುವದು. ಅವರು ನನಗೆ ವಿಧೇಯರಾಗಲು ಇಷ್ಟಪಡಲಿಲ್ಲ. ಆದುದರಿಂದ ಅವರು ನಾಶವಾಗುವರು. ನಾನು ಅವರನ್ನು ರಕ್ಷಿಸಿ ಕಾಪಾಡಿದ್ದಾಗ್ಯೂ, ಅವರು ನನಗೆ ವಿರುದ್ಧವಾಗಿ ಸುಳ್ಳಾಡಿದರು.
14 ಹೃದಯಪೂರ್ವಕವಾಗಿ ಅವರು ನನ್ನನ್ನು ಕರೆಯಲಿಲ್ಲ. ಹೌದು, ಅವರು ತಮ್ಮ ಹಾಸಿಗೆಗಳ ಮೇಲೆ

ಅಳುವರು. ಆಹಾರ ಧಾನ್ಯ, ಹೊಸ ದ್ರಾಕ್ಷಾರಸ
ವನ್ನು ಕೇಳುವಾಗ ಬೇರೆಯವರ ದೇಶಗಳಲ್ಲಿ
ಆಹಾರಕ್ಕಾಗಿ ಅಲೆದಾಡುವಾಗ ಅವರು ಅಳುವರು.
ಆದರೆ ತಮ್ಮ ಹೃದಯಗಳಲ್ಲಿ ಅವರು ನನ್ನಿಂದ
ದೂರವಾಗಿದ್ದಾರೆ.
15 ನಾನು ಅವರಿಗೆ ತರಬೇತಿಕೊಟ್ಟು ಅವರ ರಟ್ಟೆಗ
ಳನ್ನು ಬಲಪಡಿಸಿದೆನು. ಆದರೆ ನನಗೆ ವಿರುದ್ಧವಾಗಿ
ಅವರು ದುರಾಲೋಚನೆಯನ್ನು ಮಾಡಿದರು.
16 ಅವರು ದೇವರಲ್ಲದ್ದಕ್ಕೆ ತಿರುಗಿಕೊಂಡರು.
ಮುರಿದ ಬಿಲ್ಲಿನಂತೆ ಅವರಾದರು. ಅವರ ನಾಯ
ಕರು ತಮ್ಮ ಶಕ್ತಿಯ ಬಗ್ಗೆ ಹೆಚ್ಚಳಪಟ್ಟರು. ಆದರೆ
ಅವರು ಕತ್ತಿಯಲ್ಲಿ ಸಾಯುವರು. ಆಗ ಈಜಿಪ್ಟಿನ
ಜನರು ಅವರನ್ನು ನೋಡಿ ನಗಾಡುವರು.

### ವಿಗ್ರಹಾರಾಧನೆಯು ಇಸ್ರೇಲರ ನಾಶನಕ್ಕೆ ಕಾರಣ

8 ‘‘ಯೆಹೋವನಾಲಯದ ಕಾವಲುಗಾರನಂತೆ
ತುತ್ತೂರಿಯನ್ನು ತುಟಿಗಳಲ್ಲಿಟ್ಟು ಊದು.
ಇಸ್ರೇಲರು ನನ್ನ ಕಟ್ಟಳೆಗಳಿಗೆ ಅವಿಧೇಯರಾಗಿ ನನ್ನ
ಒಡಂಬಡಿಕೆಯನ್ನು ಮುರಿದಿದ್ದಾರೆ. 2ನನ್ನ ದೇವರೇ,
ಇಸ್ರೇಲಿನಲ್ಲಿರುವ ನಾವು ನಿನ್ನನ್ನು ಅರಿತಿದ್ದೇವೆ’ ಎಂದು
ಅವರು ಕಿರುಚುವರು. 3ಆದರೆ ಇಸ್ರೇಲ್ ಒಳ್ಳೇದನ್ನು
ನಿರಾಕರಿಸಿತು. ಆದುದರಿಂದ ಶತ್ರುಗಳು ಅವರನ್ನು
ಓಡಿಸಿದರು. 4ಇಸ್ರೇಲರು ತಮಗಾಗಿ ಅರಸನನ್ನು ಆರಿಸಿ
ಕೊಂಡರು. ಆದರೆ ಸಲಹೆಗಳಿಗಾಗಿ ನನ್ನ ಬಳಿಗೆ ಬರಲಿಲ್ಲ.
ಇಸ್ರೇಲರು ತಮ್ಮ ನಾಯಕರನ್ನು ಆರಿಸಿಕೊಂಡರು.
ಆದರೆ ನಾನು ತಿಳಿದಿರುವ ನಾಯಕರನ್ನು ಆರಿಸಿಕೊಳ್ಳ
ಲಿಲ್ಲ. ಇಸ್ರೇಲರು ತಮಗೆ ವಿಗ್ರಹಗಳನ್ನು ತಯಾರಿಸಲು
ತಮ್ಮ ಬೆಳ್ಳಿ ಬಂಗಾರವನ್ನು ಉಪಯೋಗಿಸಿದರು. ಆದುದ
ರಿಂದ ಅವರು ನಾಶವಾಗುವರು. 5-6ಯೆಹೋವನು
ನೀವು ಮಾಡಿಕೊಂಡ ಬಸವನನ್ನು ನಿರಾಕರಿಸಿದ್ದಾನೆ.
ಸಮಾರ್ಯವೇ, ಯೆಹೋವನು ಹೇಳುವುದೇನೆಂದರೆ,
‘ನಾನು ಇಸ್ರೇಲರ ವಿರುದ್ಧವಾಗಿ ತುಂಬಾ ಕೋಪಗೊಂಡಿ
ದ್ದೇನೆ.’’ ಇಸ್ರೇಲಿನ ಜನರು ಅವರ ಪಾಪಗಳಿಗಾಗಿ
ಶಿಕ್ಷಿಸಲ್ಪಡುವರು. ಶಿಲ್ಪಿಯು ಅವರ ವಿಗ್ರಹಗಳನ್ನು ಮಾಡಿ
ದನು. ಅವು ದೇವರಲ್ಲ. ಸಮಾರ್ಯದ ಬಸವನ ವಿಗ್ರಹ
ಗಳು ಚೂರುಚೂರಾಗಿ ಒಡೆಯಲ್ಪಡುವವು. 7ಇಸ್ರೇಲರು
ಅಜ್ಞಾನದ ಕಾರ್ಯ ಮಾಡಿದರು. ಅವರು ಗಾಳಿಯನ್ನು
ನೆಡಲು ಪ್ರಯತ್ನಿಸಿದರು. ಆದರೆ ಅವರಿಗೆ ತೊಂದರೆಗಳೇ
ಪ್ರಾಪ್ತವಾಗುವದು. ಅವರು ಸುಂಟರಗಾಳಿಯನ್ನು
ಕೊಯ್ಯುವರು. ಹೊಲದಲ್ಲಿ ಧಾನ್ಯವು ಬೆಳೆಯುವದು.
ಆದರೆ ಅವು ಆಹಾರವನ್ನು ಕೊಡುವದಿಲ್ಲ. ಒಂದುವೇಳೆ
ಅದು ಕೊಟ್ಟರೂ ಅಪರಿಚಿತರು ಅದನ್ನು ತಿನ್ನುವರು.
8 ಇಸ್ರೇಲ್ ನಾಶವಾಯಿತು. ಅವರು ಯಾರಿಗೂ
ಬೇಡವಾದ ಪಾತ್ರೆಯನ್ನು ಬಿಸಾಡಿದಂತೆ ಜನಾಂಗ
ಗಳ ಮಧ್ಯದಲ್ಲಿ ಚದರಿಸಲ್ಪಟ್ಟರು.
9 ಎಫ್ರಾಯೀಮನು ತನ್ನ ಪ್ರೇಮಿಗಳ ಬಳಿಗೆ
ಹೋದನು. ಕಾಡು ಕತ್ತೆಯಂತೆ ಅಶ್ಯೂರ್ಯದ
ಕಡೆಗೆ ಅಡ್ಡಾಡುತ್ತಾ ಹೋದನು.
10 ಜನಾಂಗಗಳ ಮಧ್ಯೆ ಇರುವ ತನ್ನ ಪ್ರೇಮಿಗಳ ಕಡೆಗೆ
ಇಸ್ರೇಲು ಹೋದನು. ಆದರೆ ನಾನು ಇಸ್ರೇಲರನ್ನು
ಒಟ್ಟುಸೇರಿಸುವೆನು. ಆದರೆ ಅದರ ಮೊದಲು ಆ
ಬಲಿಷ್ಠ ರಾಜನ ಕೈಯಿಂದ ಅವರ ಸಂಕಟ
ಅನುಭವಿಸಬೇಕು.

### ಇಸ್ರೇಲು ಯೆಹೋವನನ್ನು ಮರೆತು ವಿಗ್ರಹಗಳನ್ನು ಪೂಜಿಸಿದ್ದು

11 ಎಫ್ರಾಯೀಮ್ ಹೆಚ್ಚೆಚ್ಚಾಗಿ ಯಜ್ಞವೇದಿಕೆಗಳನ್ನು
ಕಟ್ಟಿಸಿದನು. ಅದು ಪಾಪವಾಗಿತ್ತು. ಆ ವೇದಿಕೆಗಳ
ಮೇಲೇ ಅವರು ಪಾಪಮಾಡಿದರು.
12 ಎಫ್ರಾಯೀಮನಿಗೆ ನಾನು ಹತ್ತು ಸಾವಿರ ವಿಧಿ
ನಿಯಮಗಳನ್ನು ಬರೆದರೂ ಅವನು ಅವುಗಳನ್ನು
ಬೇರೆಯವರಿಗಾಗಿ ಬರೆದದೆ ಎಂದು ತಿಳಿದು
ಕೊಳ್ಳುವನು.
13 ಇಸ್ರೇಲರು ಯಜ್ಞವನ್ನು ಪ್ರೀತಿಸುತ್ತಾರೆ. ಅವರು
ಮಾಂಸವನ್ನು ಯಜ್ಞಮಾಡಿ ತಿನ್ನುತ್ತಾರೆ. ಯೆಹೋ
ವನು ಅವರ ಯಜ್ಞವನ್ನು ಸ್ವೀಕರಿಸುವುದಿಲ್ಲ. ಅವರ
ಪಾಪಗಳನ್ನು ತನ್ನ ನೆನಪಿಗೆ ತಂದು ಅವರನ್ನು
ಶಿಕ್ಷಿಸುವನು. ಅವರು ಈಜಿಪ್ಟಿಗೆ ಸೆರೆಯಾಳುಗ
ಳಾಗಿ ಒಯ್ಯಲ್ಪಡುವರು.
14 ಇಸ್ರೇಲರು ರಾಜರ ಅರಮನೆಗಳನ್ನು ಕಟ್ಟಿದರು.
ಆದರೆ ಅದರ ನಿರ್ಮಾಣಿಕನನ್ನು ಮರೆತರು.
ಯೆಹೂದವು ಕೋಟೆಗಳನ್ನು ಕಟ್ಟುತ್ತಾನೆ; ಆದರೆ
ಯೆಹೂದದ ಪಟ್ಟಣಗಳ ಮೇಲೆ ನಾನು ಬೆಂಕಿ
ಯನ್ನು ಕಳುಹಿಸುವೆನು. ಆ ಬೆಂಕಿಯು ಅರಮನೆ
ಗಳನ್ನು ನಾಶಮಾಡುವದು.

### ಸೆರೆವಾಸದ ದುಃಖ

9 ಇಸ್ರೇಲೇ, ಇತರ ಜನಾಂಗಗಳವರಂತೆ ಹಬ್ಬವನ್ನು
ಆಚರಿಸಬೇಡ, ಉಲ್ಲಾಸಗೊಳ್ಳಬೇಡ. ನೀನು ವೇಶ್ಯೆ
ಯಂತೆ ವರ್ತಿಸಿ ನಿನ್ನ ದೇವರನ್ನು ತೊರೆದು ಬಿಟ್ಟೆ.
ಪ್ರತಿಯೊಂದು ಕಣದ ಮೇಲೆ ಲೈಂಗಿಕ ಪಾಪವನ್ನು ನಡೆ
ಸಿದಿ. 2 ಆದರೆ ಆ ಕಣದಲ್ಲಿ ತೂರಿದ ಧಾನ್ಯವು ಇಸ್ರೇಲಿಗೆ
ಸಾಕಾಗುವಷ್ಟು ಆಹಾರವನ್ನು ಒದಗಿಸದು. ಇಸ್ರೇಲಿಗೆ
ಬೇಕಾಗುವಷ್ಟು ದ್ರಾಕ್ಷಾರಸವಿರದು.

[3]ಯೆಹೋವನ ದೇಶದಲ್ಲಿ ಇಸ್ರೇಲು ವಾಸಿಸದು.
ಎಫ್ರಾಯೀಮ್ ಈಜಿಪ್ಟಿಗೆ ಹಿಂದಿರುಗುವದು.
ಅಶ್ಶೂರ್ಯದಲ್ಲಿ ಅವರು ತಮಗೆ ನಿಷೇಧಿಸಲ್ಪಟ್ಟ ಆಹಾರ
ವನ್ನು ತಿನ್ನುವರು. [4]ಇಸ್ರೇಲರು ಯೆಹೋವನಿಗೆ ದ್ರಾಕ್ಷಾ
ರಸದ ಸಮರ್ಪಣೆ ಮಾಡುವದಿಲ್ಲ. ಆತನಿಗೆ ಯಜ್ಞವನ್ನ
ರ್ಪಿಸುವದಿಲ್ಲ. ಅವರ ಯಜ್ಞಗಳು ಸಮಾಧಿಗಳಲ್ಲಿ
ಉಣ್ಣುವ ಆಹಾರದಂತಿರುವದು. ಅದನ್ನು ಯಾವ
ನಾದರೂ ಉಂಡಲ್ಲಿ ಅವನು ಅಶುದ್ಧನಾಗುವನು. ಅವರ
ರೊಟ್ಟಿಯು ದೇವರ ಆಲಯದೊಳಗೆ ಇಡಲ್ಪಡುವದಿಲ್ಲ.
ಅವರೇ ಅದನ್ನು ತಿನ್ನಬೇಕು. [5]ಯೆಹೋವನ ಹಬ್ಬಗಳ
ನ್ನಾಗಲೀ, ವಿಶ್ರಾಂತಿ ದಿನವನ್ನಾಗಲೀ ಅವರಿಗೆ ಆಚರಿಸ
ಲಾಗದು.

[6]ಶತ್ರುಗಳು ಇಸ್ರೇಲರಿಂದ ಎಲ್ಲವನ್ನು ದೋಚಿ
ಕೊಂಡು ಹೋದುದರಿಂದ ಇಸ್ರೇಲರು ಬಿಟ್ಟು
ಹೊರಟರು. ಈಜಿಪ್ಟ್ ಅವರನ್ನು ಒಟ್ಟಿಗೆ ಸೇರಿಸಿ
ಕೊಳ್ಳುವುದು. ಮೆಂಫಿಸ್ ಪಟ್ಟಣವು ಅವರನ್ನು ಹೂಳಿಡು
ವದು. ಅವರ ಬೆಳ್ಳಿಯ ನಿಕ್ಷೇಪದ ಮೇಲೆ ಕಳೆ ಬೆಳೆ
ಯುವದು. ಇಸ್ರೇಲರು ವಾಸಿಸಿದ್ದಲ್ಲಿ ಮುಳ್ಳಿನ ಗಿಡಗಳು
ಬೆಳೆಯುವವು.

### ನಿಜ ಪ್ರವಾದಿಗಳನ್ನು ಇಸ್ರೇಲ್ ನಿರಾಕರಿಸಿದರು

[7]ಪ್ರವಾದಿಯು ಹೀಗೆ ಹೇಳುತ್ತಾನೆ, ‘‘ಇಸ್ರೇಲೇ,
ಇದನ್ನು ಕಲಿತುಕೋ. ಶಿಕ್ಷೆಯ ಸಮಯವು ಬಂದದೆ.
ನೀನು ಮಾಡಿದ ದುಷ್ಟತನಕ್ಕೆ ಪ್ರತಿಯಾಗಿ ದೊರಕ
ಬೇಕಾದ ಸಂಬಳ (ಫಲ)ದ ಸಮಯವು ಬಂತು.’’ ಆದರೆ
ಇಸ್ರೇಲ್ ಜನರು ಹೀಗೆ ಹೇಳುತ್ತಾರೆ: ಪ್ರವಾದಿಯು
ಮೂರ್ಖನಾಗಿದ್ದಾನೆ. ದೇವರಾತ್ಮನುಳ್ಳ ಈ ಮನುಷ್ಯನು
ಹುಚ್ಚನಾಗಿದ್ದಾನೆ.’’ ಪ್ರವಾದಿಯು, ‘‘ನಿನ್ನ ಕೆಟ್ಟ ಪಾಪಗಳಿ
ಗಾಗಿ ನೀನು ಶಿಕ್ಷಿಸಲ್ಪಡುವಿ. ನೀನು ಹಗೆ ಮಾಡಿದುದಕ್ಕೆ
ನೀನು ಶಿಕ್ಷೆ ಅನುಭವಿಸುವಿ.’’ [8]ದೇವರೂ, ಪ್ರವಾದಿಯೂ
ಕಾವಲುಗಾರರಂತೆ ಎಫ್ರಾಯೀಮನ್ನು ಕಾಪಾಡುತ್ತಿ
ದ್ದಾರೆ. ಆದರೆ ದಾರಿಯಲ್ಲಿ ಅನೇಕ ಉರುಲುಗಳಿವೆ.
ಜನರು ಪ್ರಾವಾದಿಯನ್ನು ಹಗೆ ಮಾಡುತ್ತಾರೆ. ದೇವರ
ಆಲಯದಲ್ಲಿಯೂ ಅವನನ್ನು ಹಗೆ ಮಾಡುತ್ತಾರೆ.
[9]ಗಿಬ್ಯದ ಕಾಲದಂತೆ ಇಸ್ರೇಲರು ನಾಶನದ ಕಡೆಗೆ ಆಳ
ವಾಗಿ ಇಳಿದಿದ್ದಾರೆ. ಯೆಹೋವನು ಇಸ್ರೇಲರ ಪಾಪ
ಗಳನ್ನು ತನ್ನ ನೆನಪಿಗೆ ತಂದುಕೊಂಡು ಅವರನ್ನು
ಶಿಕ್ಷಿಸುವನು.

### ವಿಗ್ರಹಾರಧನೆಯಿಂದ ಇಸ್ರೇಲ್ ನಾಶವಾಗುತ್ತಿದೆ

[10]‘‘ನನಗೆ ಇಸ್ರೇಲ್ ಜನಾಂಗವು ಮರುಭೂಮಿಯಲ್ಲಿ
ದೊರಕಿದ ದ್ರಾಕ್ಷಿಹಣ್ಣಿನಂತಿತ್ತು. ನಿನ್ನ ಪೂರ್ವಿಕರು ಫಲ
ಕಾಲದ ಆರಂಭದಲ್ಲಿ ದೊರೆತ ಅಂಜೂರದ ಹಣ್ಣಿನಂತಿ
ದ್ದರು. ಆದರೆ ಅವರು ಬಾಳ್‌ಪೆಗೋರಿಗೆ ಬಂದಾಗ
ಅವರು ಬದಲಾದರು. ಅವರು ಕೊಳೆತು ಹೋದ ವಸ್ತುವಿ
ನಂತೆ ಆದರು. ಅವರು ಪ್ರೀತಿಸಿದ ಭಯಂಕರ ವಿಗ್ರಹಗ
ಳಂತೆ ಆದರು.

### ಇಸ್ರೇಲರಿಗೆ ಸಂತಾನವೃದ್ಧಿಯಾಗದು

[11]ಎಫ್ರಾಯೀಮನ ಮಹಿಮೆಯು ಪಕ್ಷಿಯಂತೆ ಹಾರಿ
ಹೋಗುವದು. ಅವರಲ್ಲಿ ಗರ್ಭಿಣಿಯರು ಇರುವದಿಲ್ಲ.
ಹೆರುವದೂ ಇಲ್ಲ, ಶಿಶುಗಳೂ ಇರುವದಿಲ್ಲ. [12]ಒಂದು
ವೇಳೆ ಇಸ್ರೇಲರಿಗೆ ಮಕ್ಕಳು ಹುಟ್ಟಿದರೂ ಪ್ರಯೋಜನ
ವಿಲ್ಲ. ಯಾಕೆಂದರೆ ಆ ಮಕ್ಕಳನ್ನು ಅವರಿಂದ ತೆಗೆದು
ಬಿಡುವೆನು. ನಾನು ಅವರನ್ನು ತೊರೆದುಬಿಡುವೆನು. ಆಗ
ಅವರಿಗೆ ಸಂಕಟದ ಮೇಲೆ ಸಂಕಟವು ಪ್ರಾಪ್ತಿ
ಯಾಗುವದು.

[13]ಎಫ್ರಾಯೀಮನು ತನ್ನ ಮಕ್ಕಳನ್ನು ಉರುಲಿನ ಕಡೆಗೆ
ನಡೆಸುತ್ತಿರುವದನ್ನು ನಾನು ನೋಡುತ್ತಿದ್ದೇನೆ. ಕೊಲೆ
ಗಡುಕನೆದುರು ಎಫ್ರಾಯೀಮನು ತನ್ನ ಮಕ್ಕಳನ್ನು
ತರುತ್ತಿದ್ದಾನೆ. [14]ಯೆಹೋವನೇ, ನಿನ್ನ ಇಚ್ಛೆಯ ಪ್ರಕಾರ
ಅವರಿಗೆ ಕೊಡು. ಮಗುವನ್ನು ಹೆರಲಾರದ ಗರ್ಭವನ್ನು
ಅವರಿಗೆ ಕೊಡು. ಮೊಲೆಹಾಲು ಉಣಿಸಲಾರದ ಸ್ತನ
ಗಳನ್ನು ಅವರಿಗೆ ಕೊಡು.

[15] ಅವರ ದುಷ್ಟತನವೆಲ್ಲಾ ಗಿಲ್ಗಾಲಿನಲ್ಲಿದೆ. ಅಲ್ಲಿಯೇ
ನಾನು ಅವರನ್ನು ದ್ವೇಷಿಸಲು ಪ್ರಾರಂಭಿಸಿದೆನು.
ಅವರು ಮಾಡುವ ದುಷ್ಟಕೃತ್ಯಗಳ ದೆಸೆಯಿಂದ
ನಾನು ಅವರನ್ನು ನನ್ನ ಮನೆಯಿಂದ ಹೊರಡಿಸು
ವೆನು. ಇನ್ನು ಮುಂದೆ ಅವರನ್ನು ನಾನು ಪ್ರೀತಿಸು
ವುದಿಲ್ಲ. ಅವರ ನಾಯಕರು ನನಗೆ ವಿರುದ್ಧವಾಗಿ
ದಂಗೆ ಎದ್ದವರು; ನನ್ನ ವಿರುದ್ಧವಾಗಿ ತಿರುಗಿ
ಬಿದ್ದರು.

[16] ಎಫ್ರಾಯೀಮ್ ಶಿಕ್ಷಿಸಲ್ಪಡುವುದು. ಅದರ ಬೇರು
ಒಣಗುತ್ತಲಿದೆ. ಇನ್ನು ಅವರಿಗೆ ಮಕ್ಕಳಾಗದು.
ಒಂದು ವೇಳೆ ಮಕ್ಕಳಾದಲ್ಲಿ ಅವರ ದೇಹದಿಂದ
ಬರುವ ಆ ಅಮೂಲ್ಯ ಶಿಶುವನ್ನು ನಾನು
ಸಾಯಿಸುವೆನು.

[17] ಆ ಜನರು ನನ್ನ ದೇವರ ಮಾತನ್ನು ಕೇಳಲೊಲ್ಲರು.
ಆದುದರಿಂದ ಆತನು ಅವರಿಗೆ ಕಿವಿಗೊಡುವದಿಲ್ಲ;
ಅವರು ದೇಶದೇಶಗಳಲ್ಲಿ ವಾಸಸ್ಥಾನಗಳಿಲ್ಲದೆ
ಅಲೆಯುವರು.

### ಇಸ್ರೇಲರು ಧನಿಕರಾದುದರಿಂದ ವಿಗ್ರಹಾರಾಧನೆಗೆ ನಡಿಸಲ್ಪಟ್ಟರು

10 ಇಸ್ರೇಲ್ ಅಧಿಕ ಹಣ್ಣುಗಳನ್ನು ಕೊಡುವ ದ್ರಾಕ್ಷಾಬಳ್ಳಿಯಂತಿದೆ. ಆದರೆ ಇಸ್ರೇಲ್ ಅಭಿವೃದ್ಧಿ ಹೊಂದಿದ ಹಾಗೆ ಅವರು ಸುಳ್ಳುದೇವರುಗಳನ್ನು ಪೂಜಿಸಲು ಹೆಚ್ಚು ಹೆಚ್ಚು ವೇದಿಕೆಗಳನ್ನು ಕಟ್ಟಿದರು. ಅವರ ದೇಶವು ಉತ್ತಮವಾಗುತ್ತಾ ಬರುತ್ತಿರುವಾಗ ಅವರು ತಮ್ಮ ಸುಳ್ಳು ದೇವರುಗಳಿಗೆ ಉತ್ತಮ ಕಲ್ಲುಗಳಿಂದ ವೇದಿಕೆಗಳನ್ನು ಕಟ್ಟಲು ಪ್ರಾರಂಭಿಸಿದರು.

2 ಇಸ್ರೇಲ್ ಜನರು ದೇವರನ್ನು ಮೋಸಪಡಿಸಲು ನೋಡಿದರು. ಆದರೆ ಈಗ ಅವರು ತಮ್ಮ ತಪ್ಪನ್ನು ಒಪ್ಪಿಕೊಳ್ಳಬೇಕಾಗುತ್ತದೆ. ಯೆಹೋವನು ಅವರ ಯಜ್ಞವೇದಿಕೆಗಳನ್ನು ನಾಶಮಾಡುವನು. ಅವರ ಸ್ಮಾರಕ ಕಲ್ಲುಗಳನ್ನು ಆತನು ಪುಡಿಮಾಡುವನು.

### ಇಸ್ರೇಲರ ದುಷ್ಟ ಯೋಜನೆಗಳು

[3]ಈಗ ಇಸ್ರೇಲರು ಹೇಳುವದೇನೆಂದರೆ, ‘‘ನಮಗೆ
ರಾಜನಿಲ್ಲ. ನಾವು ಯೆಹೋವನನ್ನು ಗೌರವಿಸುವದಿಲ್ಲ.
ಆತನ ಅರಸನು ನಮಗೇನೂ ಮಾಡಲು ಸಾಧ್ಯವಿಲ್ಲ.’’
[4]ಅವರು ವಾಗ್ದಾನ ಮಾಡುತ್ತಾರೆ. ಆದರೆ ಅದು ಬರೀ
ಸುಳ್ಳು. ಅವರು ಕೊಟ್ಟ ಮಾತನ್ನು ನಡಿಸುವದಿಲ್ಲ. ಬೇರೆ
ದೇಶಗಳವರೊಂದಿಗೆ ಅವರು ಒಡಂಬಡಿಕೆ ಮಾಡುತ್ತಾರೆ.
ದೇವರು ಆ ಒಡಂಬಡಿಕೆಯನ್ನು ಒಪ್ಪುವುದಿಲ್ಲ. ಅವರ
ನ್ಯಾಯಾಧೀಶರು ಉತ್ತ ಹೊಲದಲ್ಲಿ ಬೆಳೆಯುವ ವಿಷದ
ಹಣಜಿಯಂತಿದ್ದಾರೆ.
[5]ಸಮಾರ್ಯದ ಜನರು ಬೇತಾವೆನಿನಲ್ಲಿ ಬಸವನನ್ನು
ಆರಾಧಿಸುತ್ತಾರೆ. ಆ ಜನರು ನಿಜವಾಗಿಯೂ ಅಳುವರು.
ಅವರ ಪೂಜಾರಿಗಳೂ ಅಳುವರು, ಯಾಕೆಂದರೆ ಅವರ
ಸುಂದರವಾದ ವಿಗ್ರಹವು ಇಲ್ಲವಾಗುವದು. ಅದು ಒಯ್ಯ
ಲ್ಪಡುವುದು. [6]ಅಶ್ಶೂರದ ಅರಸನಿಗೆ ಬಹುಮಾನವಾಗಿ
ಅದು ಒಯ್ಯಲ್ಪಡುವುದು; ಅವನು ಇಸ್ರೇಲರ ನಾಚಿಕೆಗೆಟ್ಟ
ವಿಗ್ರಹವನ್ನು ಇಟ್ಟುಕೊಳ್ಳುವನು. ಇಸ್ರೇಲ್ ತನ್ನ ವಿಗ್ರಹ
ಕ್ಕಾಗಿ ನಾಚಿಕೆಪಡುವದು. [7]ಸಮಾರ್ಯದ ಸುಳ್ಳುದೇವರು
ನಾಶಮಾಡಲ್ಪಡುವದು. ಅದು ಮರದ ಹಲಗೆಯ
ತುಂಡೊಂದು ನೀರಿನ ಮೇಲೆ ತೇಲುವಂತಿರುವದು.
[8]ಇಸ್ರೇಲ್ ಪಾಪ ಮಾಡುತ್ತಾ ಇನ್ನೂ ಹೆಚ್ಚಾಗಿ ಎತ್ತರ
ವಾದ ಸ್ಥಳಗಳನ್ನು* ಕಟ್ಟಿತು. ಆವೆನ್‌ನಲ್ಲಿರುವ ಎತ್ತರ
ವಾದ ಸ್ಥಳ ನಾಶ ಮಾಡಲ್ಪಡುವದು. ಅದರ ಮೇಲೆ
ಮುಳ್ಳುಗಿಡಗಳೂ ಹಣಜಿಗಳೂ ಬೆಳೆಯುವವು. ಆಗ
ಅವರು ಪರ್ವತಗಳಿಗೆ ‘ನಮ್ಮನ್ನು ಮುಚ್ಚಿರಿ’ ಎಂದೂ,
ಬೆಟ್ಟಗಳಿಗೆ ‘ನಮ್ಮ ಮೇಲೆ ಬೀಳಿರಿ’ ಎಂದೂ ಹೇಳುವರು.

### ಇಸ್ರೇಲ್ ತಮ್ಮ ಪಾಪದ ಪ್ರತಿಫಲವನ್ನು ಅನುಭವಿಸುವರು

[9]ಇಸ್ರೇಲೇ, ನೀನು ಗಿಬ್ಯದವರ ಕಾಲದಿಂದಲೂ ಪಾಪ
ಮಾಡುತ್ತಲೇ ಬಂದಿರುವೆ. (ಆ ಜನರು ಅಲ್ಲಿ ಪಾಪವನ್ನು
ಮಾಡುತ್ತಲೇ ಇದ್ದಾರೆ.) ಗಿಬ್ಯದ ಆ ದುಷ್ಟ ಜನರನ್ನು
ಯುದ್ಧವು ಹಿಡಿದುಕೊಳ್ಳುವುದು. [10]ಅವರನ್ನು ಶಿಕ್ಷಿಸಲು
ನಾನು ಬರುವೆನು. ಸೈನ್ಯಗಳು ಒಟ್ಟಾಗಿ ಅವರಿಗೆ ವಿರುದ್ಧ
ವಾಗಿ ಬರುವವು. ಅವರು ಬಂದು ಇಸ್ರೇಲರನ್ನು ಅವ
ರಿಬ್ಬರ ಪಾಪಗಳಿಗಾಗಿ ಶಿಕ್ಷಿಸುವರು. [11]ಹತೋಟಿಗೆ ಬಂದ
ಕಣ ತುಳಿಯಲು ಇಷ್ಟಪಡುವ ಪ್ರಾಯದ ಹಸುವಿನಂತಿದೆ
ಎಫ್ರಾಯೀಮ್. ಆಕೆಯ ಕುತ್ತಿಗೆಗೆ ನಾನು ಒಂದು
ಒಳ್ಳೆಯ ನೊಗವನ್ನಿಡುವೆನು. ಎಫ್ರಾಯೀಮನಿಗೆ ನಾನು
ಹಗ್ಗದಿಂದ ಬಂಧಿಸುವೆನು. ಆಗ ಯೆಹೂದವು ಭೂಮಿ
ಯನ್ನು ಉಳುವದು. ಯಾಕೋಬನು ಮಣ್ಣಿನ ಗೆಡ್ಡೆ
ಗಳನ್ನು ಒಡೆದು ಪುಡಿಮಾಡುವನು.
[12]ನೀನು ಒಳ್ಳೇತನವನ್ನು ಬಿತ್ತಿದರೆ ಪ್ರೀತಿಯೆಂಬ ಬೆಳೆ
ಯನ್ನು ಕೊಯ್ಯುವೆ. ನಿನ್ನ ನೆಲವನ್ನು ಉಳುಮೆ ಮಾಡು.
ಆಗ ನೀನು ಯೆಹೋವನೊಂದಿಗೆ ಬೆಳೆಯನ್ನು
ಕೊಯ್ಯುವಿ. ಆತನು ಬರುವನು. ಮತ್ತು ಆತನ ಒಳ್ಳೇ
ತನವು ನಿನ್ನ ಮೇಲೆ ಮಳೆಯಂತೆ ಸುರಿಯುವದು.
[13]ಆದರೆ ನೀನು ದುಷ್ಟತನವನ್ನು ಬಿತ್ತಿ ಸಂಕಟವೆಂಬ
ಬೆಳೆಯನ್ನು ಕೊಯ್ದಿರುವೆ. ನಿನ್ನ ಸುಳ್ಳಿನ ಪ್ರತಿಫಲವನ್ನು
ತಿಂದಿರುವೆ. ಯಾಕೆಂದರೆ ನೀನು ನಿನ್ನ ಸಾಮರ್ಥ್ಯ ಮತ್ತು
ನಿನ್ನ ಸೈನ್ಯದ ಮೇಲೆ ಭರವಸವಿಟ್ಟಿರುವೆ. [14] ನಿನ್ನ ಸೈನ್ಯಕ್ಕೆ
ರಣರಂಗದ ಸ್ವರವು ಕೇಳಿಸುವದು. ನಿನ್ನ ಕೋಟೆಗ
ಳೆಲ್ಲವೂ ಕೆಡವಲ್ಪಡುವದು. ಬೇತ್‌ಅರ್ಬೇಲನ್ನು ಶಲ್ಮಾ
ನನು ಕೆಡವಿದಂತೆ ಆಗುವದು. ಆ ಯುದ್ಧದ ಸಮಯದಲ್ಲಿ
ತಾಯಿಯು ತನ್ನ ಮಕ್ಕಳೊಂದಿಗೆ ಕೊಲ್ಲಲ್ಪಡುವಳು. [15]ಆ
ದಿನದಲ್ಲಿ ಬೇತೇಲು ನಿಮಗೆ ಆ ದುರ್ಗತಿಯನ್ನು ತರು
ವದು. ಯಾಕೆಂದರೆ ನೀನು ಅನೇಕ ಕೆಟ್ಟ ಕಾರ್ಯಗಳನ್ನು
ಮಾಡಿರುವೆ. ಅದು ಪ್ರಾರಂಭವಾದಾಗ ಇಸ್ರೇಲಿನ
ಅರಸನು ಸಂಪೂರ್ಣವಾಗಿ ನಾಶವಾಗುವನು.

### ಇಸ್ರೇಲು ಯೆಹೋವನನ್ನು ಮರೆತುಬಿಟ್ಟಿದೆ

11 ‘‘ಯೆಹೋವನಾದ ನಾನು ಇಸ್ರೇಲನ್ನು ಸಣ್ಣ ಮಗುವಾಗಿದ್ದಾಗಲೇ ಪ್ರೀತಿಸಿದೆನು. ನನ್ನ ಮಗನನ್ನು ಈಜಿಪ್ಟಿನಿಂದ ಹೊರ ಕರೆದೆನು.

2 ಎಷ್ಟು ಹೆಚ್ಚಾಗಿ ನಾನು ಇಸ್ರೇಲರನ್ನು ಕರೆದೆನೋ ಅಷ್ಟೇ ಹೆಚ್ಚಾಗಿ ಅವರು ನನ್ನನ್ನು ತೊರೆದರು.

---

**ಎತ್ತರವಾದ ಸ್ಥಳ** ಸುಳ್ಳು ದೇವರುಗಳನ್ನು ಪೂಜಿಸಲು ನಿರ್ಮಿಸಲ್ಪಟ್ಟ ಸ್ಥಳ. ಈ ಸ್ಥಳಗಳು ಸಾಮಾನ್ಯವಾಗಿ ಬೆಟ್ಟಗಳ ಮೇಲೆ ಇರುತ್ತಿದ್ದವು.

ಇಸ್ರೇಲರು ಬಾಳನ ವಿಗ್ರಹಗಳಿಗೆ ಯಜ್ಞವನ್ನರ್ಪಿಸಿ
ದರು. ವಿಗ್ರಹಗಳಿಗೆ ಧೂಪ ಹಾಕಿದರು.
3 ಆದರೆ ಎಫ್ರಾಯೀಮನಿಗೆ ನಡೆಯಲು ಕಲಿಸಿದ್ದು
ನಾನು. ಇಸ್ರೇಲರನ್ನು ನಾನು ನನ್ನ ತೋಳುಗಳಲ್ಲಿ
ಎತ್ತಿಕೊಂಡೆನು. ನಾನು ಅವರನ್ನು ಗುಣಪಡಿಸಿ
ದೆನು. ಆದರೆ ಅವರಿಗೆ ಅದು ಗೊತ್ತಿಲ್ಲ.
4 ನಾನು ಅವರನ್ನು ಪ್ರೀತಿ ಎಂಬ ಹಗ್ಗಗಳಿಂದ ಹತ್ತಿ
ರಕ್ಕೆ ಎಳೆದುಕೊಂಡೆನು. ಅವರಿಗೆ ಸ್ವತಂತ್ರವನ್ನು
ಕೊಟ್ಟೆನು. ನಾನು ಬಾಗಿ ಅವರಿಗೆ ಉಣಿಸಿದೆನು.

5 ‘‘ದೇವರ ಕಡೆಗೆ ಹಿಂದಿರುಗಲು ಇಸ್ರೇಲರಿಗೆ
ಮನಸ್ಸಿಲ್ಲ. ಆದುದರಿಂದ ಅವರು ಈಜಿಪ್ಟಿಗೆ ಹೋಗು
ವರು. ಅಶ್ಶೂರದ ಅರಸನು ಅವರಿಗೆ ಅರಸನಾಗುವನು.
6 ಅವರ ನಗರದ ಮೇಲೆ ಖಡ್ಗವು ಬೀಸಲ್ಪಟ್ಟು ಅವರ
ಬಲಿಷ್ಠರನ್ನು ಸಾಯಿಸುವದು; ಅವರ ನಾಯಕರನ್ನು
ನಾಶಮಾಡುವದು.
7 ‘‘ನಾನು ಹಿಂದೆ ಬರುವೆನೆಂದು ನನ್ನ ಜನರು ಎದುರು
ನೋಡುತ್ತಿದ್ದಾರೆ. ಅವರು ಉನ್ನತದಲ್ಲಿರುವ ದೇವರಿಗೆ
ಮೊರೆಯಿಡುತ್ತಿದ್ದಾರೆ. ಆದರೆ ದೇವರು ಅವರಿಗೆ
ಸಹಾಯ ಮಾಡುವದಿಲ್ಲ.

## ಇಸ್ರೇಲನ್ನು ನಾಶಮಾಡಲು ಯೆಹೋವನು ಇಷ್ಟಪಡುವದಿಲ್ಲ

8 ‘‘ಎಫ್ರಾಯೀಮೇ, ನಿನ್ನನ್ನು ಬಿಟ್ಟುಬಿಡಲು ನನಗೆ
ಇಷ್ಟವಿಲ್ಲ. ಇಸ್ರೇಲೇ, ನಿನ್ನನ್ನು ಸಂರಕ್ಷಿಸಲು ನನಗೆ
ಇಷ್ಟ. ನಿನ್ನನ್ನು ಆದ್ಮದಂತೆ ಮಾಡಲು ನನಗೆ
ಮನಸ್ಸಿಲ್ಲ. ನಿನ್ನನ್ನು ಬೋಯೀಮಿನಂತೆ
ಮಾಡಲು ನನಗೆ ಮನಸ್ಸಿಲ್ಲ. ನಾನು ನನ್ನ ನಿರ್ಧಾರ
ವನ್ನು ಬದಲಾಯಿಸುತ್ತಿದ್ದೇನೆ. ನಿನ್ನ ಮೇಲಿರುವ
ನನ್ನ ಪ್ರೀತಿಯು ಆಳವಾಗಿದೆ.
9 ನನ್ನ ಭಯಂಕರವಾದ ಕೋಪವು ಮೇಲುಗೈಸಾಧಿ
ಸುವದಿಲ್ಲ. ಎಫ್ರಾಯೀಮನನ್ನು ನಾನು ತಿರುಗಿ
ನಾಶಮಾಡುವದಿಲ್ಲ. ನಾನು ದೇವರು, ನರ
ಮನುಷ್ಯನಲ್ಲ. ನಾನು ಪವಿತ್ರನು, ನಿನ್ನೊಂದಿಗಿರು
ವೆನು. ನನ್ನ ಕೋಪವನ್ನು ಪ್ರದರ್ಶಿಸೆನು.
10 ನಾನು ಸಿಂಹದಂತೆ ಗರ್ಜಿಸುವೆನು. ನಾನು ಗರ್ಜಿಸು
ವಾಗ ನನ್ನ ಮಕ್ಕಳು ಬರುವರು, ಮತ್ತು ನನ್ನನ್ನು
ಹಿಂಬಾಲಿಸುವರು. ಪಶ್ಚಿಮದಿಂದ ನನ್ನ ಮಕ್ಕಳು
ಹೆದರಿ ನಡುಗುತ್ತಾ ಬರುವರು.
11 ಈಜಿಪ್ಟಿನಿಂದ ಅವರು ಪಕ್ಷಿಗಳಂತೆ ನಡುಗುತ್ತಾ
ಬರುವರು. ಅಶ್ಶೂರದಿಂದ ನಡುಗುವ ಪಾರಿವಾಳ
ಗಳ ರೀತಿಯಲ್ಲಿ ಬರುವರು. ಆಗ ನಾನು ಅವರನ್ನು
ಮನೆಗೆ ಕರಕೊಂಡು ಹೋಗುವೆನು. ಇದು
ಯೆಹೋವನ ನುಡಿ.
12 ಎಫ್ರಾಯೀಮನು ಸುಳ್ಳು ದೇವರುಗಳಿಂದ ನನ್ನನ್ನು
ಸುತ್ತುವರಿದನು. ಇಸ್ರೇಲಿನ ಜನರು ನನಗೆ ವಿರುದ್ಧ
ವಾಗಿ ಎದ್ದರು. ಆದರೆ ಅವರು ನಾಶವಾದರು.
ಯೆಹೂದನು ಈಗಲೂ ಎಲ್ ಜೊತೆಯಲ್ಲಿ ನಡೆ
ಯುತ್ತಿದ್ದಾನೆ. ಯೆಹೂದನು ಪರಿಶುದ್ಧರಿಗೆ
ನಿಷ್ಠೆಯಿಂದಿದ್ದಾನೆ.

## ಯೆಹೋವನು ಇಸ್ರೇಲಿಗೆ ವಿರುದ್ಧವಾಗಿದ್ದಾನೆ

12 ಎಫ್ರಾಯೀಮ್ ಸಮಯವನ್ನು ಹಾಳು ಮಾಡು
ತ್ತಿದ್ದಾನೆ. ಇಸ್ರೇಲು ದಿನವಿಡೀ ಗಾಳಿಯನ್ನು
ಹಿಮ್ಮೆಟ್ಟುತ್ತಿದ್ದಾನೆ. ಜನರು ಹೆಚ್ಚೆಚ್ಚಾಗಿ ಸುಳ್ಳು ಹೇಳುತ್ತಿ
ದ್ದಾರೆ; ಹೆಚ್ಚೆಚ್ಚಾಗಿ ಕದಿಯುತ್ತಾರೆ. ಅಶ್ಶೂರ್ಯದವ
ರೊಂದಿಗೆ ಒಪ್ಪಂದ ಮಾಡಿರುತ್ತಾರೆ. ತಮ್ಮ ಆಲೀವ್
ಎಣ್ಣೆಯನ್ನು ಈಜಿಪ್ಟಿಗೆ ಕೊಂಡೊಯ್ಯುತ್ತಿದ್ದಾರೆ.
2 ಯೆಹೋವನು ಹೇಳುವದೇನೆಂದರೆ, ‘‘ಇಸ್ರೇಲಿಗೆ
ವಿರುದ್ಧವಾಗಿ ನಾನು ವಾದ ಮಾಡುತ್ತೇನೆ. ತಾನು ಮಾಡಿದ
ಸಂಗತಿಗಳಿಗಾಗಿ ಯಾಕೋಬನು ಶಿಕ್ಷೆ ಅನುಭವಿಸಬೇಕು.
3 ತನ್ನ ತಾಯಿಯ ಗರ್ಭದಲ್ಲಿರುವಾಗಲೇ ಯಾಕೋಬನು
ತನ್ನ ಅಣ್ಣನಿಗೆ ಮೋಸಮಾಡಲು ಪ್ರಾರಂಭಮಾಡಿದ್ದನು.
ಯಾಕೋಬನು ಬಲಶಾಲಿಯಾದ ಯೌವನಸ್ಥನು.
ಆಗ ಅವನು ದೇವರೊಂದಿಗೆ ಹೋರಾಡಿದನು.
4 ಯಾಕೋಬನು ದೇವದೂತನೊಡನೆ ಹೋರಾಡಿ
ಗೆದ್ದನು. ಅವನು ಕನಿಕರಕ್ಕಾಗಿ ಮೊರೆಯಿಟ್ಟನು. ಇದು
ಬೇತೇಲ್ ಎಂಬಲ್ಲಿ ನಡೆಯಿತು. ಆ ಸ್ಥಳದಲ್ಲಿ ಆತನು
ನಮ್ಮೊಂದಿಗೆ ಮಾತನಾಡಿದನು. 5 ಹೌದು ಯೆಹೋವನು
ಸೈನ್ಯಗಳ ದೇವರಾಗಿದ್ದಾನೆ. ಆತನ ಹೆಸರು ಯೆಹೋವನು.
6 ಆದುದರಿಂದ ನಿನ್ನ ಯೆಹೋವನ ಬಳಿಗೆ ಹಿಂದಿರುಗಿ
ಬಾ. ಆತನಿಗೆ ವಿಧೇಯನಾಗಿರು. ಸರಿಯಾಗಿರುವದನ್ನೇ
ಮಾಡು. ಯಾವಾಗಲೂ ನಿನ್ನ ದೇವರ ಮೇಲೆ
ಭರವಸವಿಡು.
7 ‘‘ಯಾಕೋಬನು ಒಬ್ಬ ವ್ಯಾಪಾರಿ.* ಅವನು ತನ್ನ
ಸ್ನೇಹಿತನಿಗೇ ಮೋಸಮಾಡುತ್ತಾನೆ. ಅವನ ತ್ರಾಸು
ಮೋಸದ್ದು, 8 ಎಫ್ರಾಯೀಮು ‘ನಾನು ಐಶ್ವರ್ಯ
ವಂತನು. ನನ್ನಲ್ಲಿ ನಿಜವಾದ ಐಶ್ವರ್ಯವಿದೆ. ನನ್ನ ಅಪ
ರಾಧಗಳನ್ನು ಯಾರೂ ಕಂಡು ಹಿಡಿಯಲಾರರು. ನನ್ನ
ದುಷ್ಟತ್ವದ ಬಗ್ಗೆ ಯಾರಿಗೂ ತಿಳಿಯದು’ ಎಂದು
ಅನ್ನುತ್ತಾನೆ.

**ವ್ಯಾಪಾರಿ** ಇಸ್ರೇಲರು ಕಾನಾನಿನಲ್ಲಿ ವಾಸವಾಗಿರುವಾಗ ಅಲ್ಲಿಯ ನಿವಾಸಿಗಳ ದುಷ್ಟಮಾರ್ಗಗಳನ್ನು ಅನುಸರಿಸುವರು, ಉದಾ. ಮೋಸದ ತಕ್ಕಡಿ.

9‘‘ಆದರೆ ನೀನು ಈಜಿಪ್ಟ್ ದೇಶದಲ್ಲಿರುವಾಗಲೇ
ನಾನು ನಿನ್ನ ದೇವರಾಗಿದ್ದೇನೆ. ನೀನು ಗುಡಾರಗಳಲ್ಲಿ
ವಾಸಿಸುವಂತೆ ಮಾಡುವೆನು. 10ನಾನು ಪ್ರವಾದಿಗ
ಳೊಂದಿಗೆ ಮಾತನಾಡಿದೆನು. ಅವರಿಗೆ ಅನೇಕ ದರ್ಶನ
ಗಳನ್ನು ಕೊಟ್ಟೆನು. ನನ್ನ ಪಾಠಗಳನ್ನು ನಿಮಗೆ ಕಲಿಸುವಂತೆ
ಅನೇಕ ಮಾರ್ಗಗಳನ್ನು ಪ್ರವಾದಿಗಳಿಗೆ ತೋರಿಸಿ
ಕೊಟ್ಟೆನು. 11ಆದರೆ ಗಿಲ್ಯಾದಿನ ಜನರು ಪಾಪ ಮಾಡಿ
ದ್ದಾರೆ. ಅವರ ಬಳಿಯಲ್ಲಿ ಅನೇಕ ಭಯಂಕರವಾದ
ವಿಗ್ರಹಗಳಿವೆ. ಗಿಲ್ಗಾಲಿನಲ್ಲಿ ಬಸವನ ವಿಗ್ರಹಗಳಿಗೆ ಜನರು
ಯಜ್ಞವನ್ನರ್ಪಿಸುತ್ತಾರೆ. ಅವರಲ್ಲಿ ಅನೇಕ ಯಜ್ಞವೇದಿಕೆ
ಗಳಿವೆ. ಹೇಗೆ ಉಳಿಮೆ ಮಾಡಿದ ಹೊಲದಲ್ಲಿ ಮಣ್ಣಿನ
ಸಾಲುಗಳಿರುತ್ತದೋ ಅದೇ ರೀತಿಯಲ್ಲಿ ಅವರ ಬಳಿ
ಯಲ್ಲಿ ವಿಗ್ರಹಗಳ ಸಾಲಿದೆ.

12‘‘ಯಾಕೋಬನು ಅರಾಮ್ ದೇಶಕ್ಕೆ ಓಡಿ
ಹೋದನು. ಅಲ್ಲಿ ಇಸ್ರೇಲ್ ಒಬ್ಬ ಹೆಂಡತಿಗಾಗಿ ಸೇವೆ
ಮಾಡಿದನು. ಇನ್ನೊಂದು ಹೆಂಡತಿಯನ್ನು ಮಾಡಿಕೊಳ್ಳ
ಲಿಕ್ಕೆ ಕುರಿಗಳನ್ನು ಕಾಯ್ದನು. 13ಆದರೆ ದೇವರು
ಇಸ್ರೇಲರನ್ನು ಈಜಿಪ್ಟಿನಿಂದ ಹೊರತರುವದಕ್ಕಾಗಿ ಒಬ್ಬ
ಪ್ರವಾದಿಯನ್ನು ಉಪಯೋಗಿಸಿದನು. ಇಸ್ರೇಲರನ್ನು
ಪ್ರವಾದಿಯ ಮೂಲಕ ಬಿಡಿಸಿದನು. 14ಆದರೆ ಎಫ್ರಾಯೀ
ಮನು ಯೆಹೋವನನ್ನು ಅತಿಯಾಗಿ ಕೋಪಿಸಿಕೊಳ್ಳು
ವಂತೆ ಮಾಡಿದನು. ಎಫ್ರಾಯೀಮನು ಅನೇಕ ಮಂದಿ
ಯನ್ನು ಕೊಲೆ ಮಾಡಿದನು. ಅವನ ಅಪರಾಧಗಳಿಗಾಗಿ
ಅವನು ಶಿಕ್ಷಿಸಲ್ಪಡುವನು. ಅವನ ದೇವರಾದ ಯೆಹೋ
ವನು ಅವನು ಮಾಡಿದ ಅಪರಾಧಕ್ಕೆ ತಕ್ಕ ದಂಡನೆಯನ್ನು
ವಿಧಿಸಿ ಅವಮಾನ ಹೊರುವಂತೆ ಮಾಡುವನು.’’

### ಇಸ್ರೇಲ್ ತನ್ನನ್ನು ತಾನೇ ನಾಶಮಾಡಿಕೊಂಡಿತು

13 ‘‘ಎಫ್ರಾಯೀಮ್ ಇಸ್ರೇಲರೊಳಗೆ ತನ್ನನ್ನು
ತಾನೇ ಮುಖ್ಯಸ್ಥನನ್ನಾಗಿ ಮಾಡಿಕೊಂಡನು.
ಎಫ್ರಾಯೀಮನು ಮಾತನಾಡಿದಾಗ ಜನರು ಹೆದರಿ
ನಡುಗಿದರು. ಆದರೆ ಅವನು ಪಾಪದಲ್ಲಿ ಬಿದ್ದನು. ಬಾಳ
ನನ್ನು ಪೂಜಿಸಲು ಪ್ರಾರಂಭಿಸಿದನು. 2ಈಗ ಇಸ್ರೇಲರು
ಹೆಚ್ಚೆಚ್ಚಾಗಿ ಪಾಪ ಮಾಡುತ್ತಿರುತ್ತಾರೆ. ತಮಗಾಗಿ ವಿಗ್ರಹ
ಗಳನ್ನು ಮಾಡಿಕೊಳ್ಳುತ್ತಾರೆ. ಅಕ್ಕಸಾಲಿಗರು ಬೆಳ್ಳಿಯಿಂದ
ವಿಗ್ರಹಗಳನ್ನು ಮಾಡುವರು. ತಾವು ಮಾಡಿದ ಮೂರ್ತಿಗ
ಳೊಂದಿಗೆ ಮಾತನಾಡುವರು. ಆ ವಿಗ್ರಹಗಳಿಗೆ ಯಜ್ಞವನ್ನ
ರ್ಪಿಸುವರು. ಬಂಗಾರದ ಬಸವನ ವಿಗ್ರಹಕ್ಕೆ ಮುದ್ದು
ಕೊಡುವರು. 3ಆದುದರಿಂದ ಆ ಜನರು ಬೇಗನೇ
ಕಣ್ಮರೆಯಾಗುವರು. ಅವರು ಬೆಳಗಿನ ಜಾವದ ಇಬ್ಬನಿ
ಯಂತೆ ಬೇಗನೇ ಮಾಯವಾಗುವರು. ಇಸ್ರೇಲರು ಕಣದ
ಲ್ಲಿರುವ ಹೊಟ್ಟಿನಂತೆ ಗಾಳಿಯಲ್ಲಿ ಹೊಡೆದುಕೊಂಡು
ಹೋಗುವರು. ಇಸ್ರೇಲರು ಮನೆಯೊಳಗಿಂದ ಮೇಲಕ್ಕೆ
ಹೊರಟು ಆಮೇಲೆ ಕಾಣದೆ ಹೋಗುವ ಹೊಗೆ
ಯಂತಿದ್ದಾರೆ.

4‘‘ನೀವು ಈಜಿಪ್ಟಿನಲ್ಲಿದ್ದ ದಿವಸಗಳಿಂದ ನಾನೇ ನಿಮ್ಮ
ಯೆಹೋವನಾಗಿದ್ದೇನೆ. ನನ್ನ ಹೊರತು ಬೇರೆ ಯಾವ
ದೇವರನ್ನೂ ನೀವು ತಿಳಿದಿರಲಿಲ್ಲ. ನನ್ನ ಹೊರತು ಬೇರೆ
ಯಾವ ರಕ್ಷಕನೂ ಇಲ್ಲ. 5ಮರುಭೂಮಿಯಲ್ಲಿ ನಿನ್ನನ್ನು
ತಿಳಿದುಕೊಂಡಿದ್ದೆನು. ಆ ಒಣಭೂಮಿಯಲ್ಲಿ ನಾನು
ನಿನ್ನನ್ನು ಬಲ್ಲೆನು. 6ನಾನು ಇಸ್ರೇಲರಿಗೆ ಆಹಾರ ಒದಗಿಸಿ
ದೆನು. ಅವರು ಆ ಆಹಾರವನ್ನು ಉಂಡು ತಿಂದು ತೃಪ್ತರಾಗಿ
ಕೊಬ್ಬೇರಿದ್ದರಿಂದ ನನ್ನನ್ನು ಮರೆತರು.

7‘‘ಆದುದರಿಂದಲೇ ನಾನು ಅವರಿಗೆ ಸಿಂಹದಂತಿರು
ವೆನು. ದಾರಿ ಬದಿಯಲ್ಲಿ ಹೊಂಚು ಹಾಕುವ ಚಿರತೆಯಂತಿ
ರುವೆನು. 8ತನ್ನ ಮರಿಗಳನ್ನು ಕಳೆದುಕೊಂಡ ಕರಡಿಯಂತೆ
ಅವರ ಮೇಲರಗಿ ಅವರನ್ನು ಗಾಯಗೊಳಿಸಿ ಅವರ
ಎದೆಯನ್ನು ಸೀಳಿಬಿಡುವೆನು. ನಾನು ಸಿಂಹದಂತೆಯೂ
ಕ್ರೂರ ಮೃಗದಂತೆಯೂ ಅವರನ್ನು ಸೀಳಿ ತಿಂದು
ಬಿಡುವೆನು.’’

### ದೈವಕೋಪದಿಂದ ಯಾರೂ ಇಸ್ರೇಲರನ್ನು ರಕ್ಷಿಸಲಾರರು

9‘‘ಇಸ್ರೇಲೇ, ನಾನು ನಿನಗೆ ಸಹಾಯ ಮಾಡಿದರೂ
ನೀನು ನನಗೆ ವಿರೋಧವಾಗಿ ಎದ್ದಿರುವೆ. ಆದುದರಿಂದ
ನಾನು ನಿನ್ನನ್ನು ನಾಶಮಾಡುವೆನು. 10ನಿನ್ನ ಅರಸನೆಲ್ಲಿ?
ನಿನ್ನ ಯಾವ ಪಟ್ಟಣದಲ್ಲಿಯಾಗಲಿ ಅವನು ನಿನ್ನನ್ನು ರಕ್ಷಿಸ
ಲಾರ. ನಿನ್ನ ನ್ಯಾಯಾಧೀಶರುಗಳೆಲ್ಲಿ? ನೀನು, ‘ನಮಗೆ
ರಾಜನನ್ನೂ ನಾಯಕರನ್ನೂ ಕೊಡು’ ಎಂದು ಕೇಳಿ
ಕೊಂಡೆ. 11ನಾನು ಕೋಪಗೊಂಡೆನು ಮತ್ತು ಒಬ್ಬ ಅರಸ
ನನ್ನು ಕೊಟ್ಟೆನು. ನಾನು ಹೆಚ್ಚಾಗಿ ಕೋಪಗೊಂಡಾಗ
ಅವನನ್ನು ತೆಗೆದುಬಿಟ್ಟೆನು.

12 ‘‘ಎಫ್ರಾಯೀಮು ತನ್ನ ಅಪರಾಧವನ್ನು ಮುಚ್ಚಿಟ್ಟು
ಕೊಳ್ಳಲು ಪ್ರಯತ್ನಿಸಿತು. ತಾನು ಮಾಡಿದ
ಪಾಪಗಳು ಯಾರಿಗೂ ತಿಳಿದಿಲ್ಲವೆಂದು ಅದು
ಭಾವಿಸಿತು; ಆದರೆ ಅದು ಶಿಕ್ಷಿಸಲ್ಪಡುವುದು;
13 ಅದರ ಶಿಕ್ಷೆಯು ಒಬ್ಬ ಸ್ತ್ರೀಯ ಪ್ರಸವವೇದನೆ
ಯಂತಿರುವದು. ಅದು ಜಾಣನಾದ ಮಗನಲ್ಲ;
ಹುಟ್ಟುವ ಸಮಯ ಬಂದರೂ ಅದು ಜೀವಿಸು
ವದಿಲ್ಲ.
14 ‘‘ಸಮಾಧಿಯಿಂದ ಅದನ್ನು ರಕ್ಷಿಸುವೆನು; ಮರಣ
ದಿಂದ ಅದನ್ನು ಪಾರು ಮಾಡುವೆನು. ಮರಣವೇ,

ನಿನ್ನ ವ್ಯಾಧಿಗಳೆಲ್ಲಿ? ಸಮಾಧಿಯೇ, ನಿನ್ನ ಶಕ್ತಿ ಎಲ್ಲಿ? ನಾನು ಪ್ರತಿಕಾರ ಸಲ್ಲಿಸುವದಿಲ್ಲ.

15 ಇಸ್ರೇಲ್ ತನ್ನ ಸಹೋದರರ ಮಧ್ಯದಲ್ಲಿ ಬೆಳೆಯುವನು. ಒಂದು ಬಲವಾದ ಪೂರ್ವದಿಕ್ಕಿನ ಗಾಳಿಯು ಬರುವದು. ಯೆಹೋವನ ಗಾಳಿಯು ಮರುಭೂಮಿಯಿಂದ ಬೀಸುವದು. ಅವನ ನೀರಿನ ಒರತೆಯು ಒಣಗಿ ಹೋಗುವದು. ಆ ಗಾಳಿಯು ಇಸ್ರೇಲರ ಐಶ್ವರ್ಯವನ್ನೆಲ್ಲಾ ಎತ್ತಿಕೊಂಡು ಹೋಗಿ ಬಿಡುವದು.

16 ಸಮಾರ್ಯವು ಶಿಕ್ಷಿಸಲ್ಪಡಬೇಕು. ಯಾಕೆಂದರೆ ಆಕೆಯು ತನ್ನ ದೇವರಿಗೆ ವಿರುದ್ಧವಾಗಿ ನಡೆದಳು. ಇಸ್ರೇಲರು ಖಡ್ಗದಿಂದ ಸಾಯುವರು. ಅವರ ಮಕ್ಕಳು ಹರಿಯಲ್ಪಟ್ಟು ಚೂರು ಚೂರಾಗುವರು. ಅವರ ಗರ್ಭಿಣಿ ಸ್ತ್ರೀಯರನ್ನು ಸೀಳಿಬಿಡುವರು.''

### ಯೆಹೋವನ ಬಳಿಗೆ ಹಿಂದಿರುಗಿರಿ

14 ಇಸ್ರೇಲೇ, ನೀನು ಜಾರಿಬಿದ್ದು ದೇವರಿಗೆ ವಿರುದ್ಧ
ವಾಗಿ ಪಾಪ ಮಾಡಿದಿ. ನಿನ್ನ ದೇವರಾದ
ಯೆಹೋವನ ಬಳಿಗೆ ಹಿಂದಿರುಗಿ ಬಾ. 2 ನೀನು ಹೇಳ
ಬೇಕಾದ ವಿಷಯಗಳ ಕುರಿತು ನೀನು ಆಲೋಚಿಸು
ಮತ್ತು ಯೆಹೋವನ ಬಳಿಗೆ ಹಿಂದಿರುಗಿ ಬಾ, ಮತ್ತು
ಆತನಿಗೆ ಹೀಗೆ ಹೇಳು:

''ನಮ್ಮ ಪಾಪಗಳನ್ನು ನಮ್ಮಿಂದ ತೆಗೆ. ನಾವು ಮಾಡುವ ಒಳ್ಳೇ ಕಾರ್ಯಗಳನ್ನು ಸ್ವೀಕರಿಸು. ಆಗ ನಮ್ಮ ತುಟಿಗಳಿಂದ ನಿನಗೆ ಸ್ತೋತ್ರವೆಂಬ ಕಾಣಿಕೆಯನ್ನು ಸಮರ್ಪಿಸುವೆವು.

3 ಅಶ್ಶೂರವು ನಮ್ಮನ್ನು ರಕ್ಷಿಸಲಾರದು. ನಾವು ಕುದುರೆ ಮೇಲೆ ಸವಾರಿ ಮಾಡುವದಿಲ್ಲ. ನಮ್ಮ ಕೈಗಳು ತಯಾರಿಸಿದ ಬೊಂಬೆಗಳಿಗೆ ನಾವು ಇನ್ನು 'ನಮ್ಮ ದೇವರು' ಎಂದು ಹೇಳುವದಿಲ್ಲ. ಯಾಕಂದರೆ ಅನಾಥರಿಗೆ ಕರುಣೆಯನ್ನು ತೋರಿಸುವವನು. ನೀನೇ.''

### ಯೆಹೋವನು ಇಸ್ರೇಲನ್ನು ಕ್ಷಮಿಸುವನು

4 ಯೆಹೋವನು ಹೇಳುವದೇನೆಂದರೆ, ''ಅವರು ನನ್ನನ್ನು ತೊರೆದುಬಿಟ್ಟಿದ್ದನ್ನು ನಾನು ಕ್ಷಮಿಸುವೆನು. ಅವರನ್ನು ಅಧಿಕವಾಗಿಯೂ ಸ್ವಇಚ್ಛೆಯಿಂದಲೂ ಪ್ರೀತಿಸುವೆನು. ಈಗ ಅವರ ಮೇಲೆ ನಾನು ಕೋಪಿಸುವದಿಲ್ಲ.

5 ಇಸ್ರೇಲರಿಗೆ ನಾನು ಇಬ್ಬನಿಯಂತಿರುವೆನು. ನೆಲದಾವರೆಯಂತೆ ಇಸ್ರೇಲ್ ಅರಳುವದು. ಲೆಬನೋನಿನ ದೇವದಾರು ವೃಕ್ಷಗಳಂತೆ ಸೊಂಪಾಗಿ ಬೆಳೆಯುವನು.

6 ಅವನ ಕೊಂಬೆಗಳು ಹರಡುವವು; ಅಂದವಾದ ಆಲೀವ್ ಮರದಂತಿರುವನು. ಲೆಬನೋನಿನ ದೇವದಾರು ಮರಗಳ ಸುವಾಸನೆಯಂತೆ ಅವನ ವಾಸನೆ ಇರುವದು.

7 ಇಸ್ರೇಲಿನ ಜನರು ತಿರುಗಿ ನನ್ನ ಆಶ್ರಯದಲ್ಲಿ ವಾಸಿಸುವರು. ಧಾನ್ಯದ ಸಸಿಗಳಂತೆ ಬೆಳೆಯುವರು, ದ್ರಾಕ್ಷಾಲತೆಯಂತೆ ಚಿಗುರುವರು. ಲೆಬನೋನಿನ ದ್ರಾಕ್ಷಾಬಳ್ಳಿಯಂತೆ ಅವರು ಇರುವರು.''

### ವಿಗ್ರಹಗಳ ಬಗ್ಗೆ ಯೆಹೋವನ ಎಚ್ಚರಿಕೆ

8 ''ಎಫ್ರಾಯೀಮೇ, ಇನ್ನು ಮುಂದೆ ವಿಗ್ರಹವು ನಿನ್ನಲ್ಲಿರಬಾರದು. ನಿನ್ನ ಪ್ರಾರ್ಥನೆಗೆ ಉತ್ತರಿಸುವವನು ನಾನೇ. ನಿನ್ನನ್ನು ಕಾಯುವವನು ನಾನೇ. ನಾನು ತುರಾಯಿ ಮರದಂತೆ ಸದಾ ಹಸಿರಾಗಿರುವೆನು. ನಿನ್ನ ಫಲಗಳು ನನ್ನಿಂದ ಬರುವದು.''

### ಅಂತಿಮ ಸಲಹೆ

9 ಬುದ್ಧಿವಂತ ಮನುಷ್ಯನು ಇವುಗಳನ್ನು ಅರ್ಥ ಮಾಡಿಕೊಳ್ಳುತ್ತಾನೆ. ಜಾಣನು ಇದನ್ನು ಕಲಿತುಕೊಳ್ಳುತ್ತಾನೆ. ಯೆಹೋವನ ಮಾರ್ಗವು ಸರಿಯಾದದ್ದು. ಒಳ್ಳೇ ಜನರು ಅದರೊಂದಿಗೆ ಜೀವಿಸುವರು. ಪಾಪಿಗಳು ಅವುಗಳಿಂದ ಸಾಯುವರು.

# ಯೋವೇಲ

## ಮಿಡತೆಗಳು ಬೆಳೆಯನ್ನು ನಾಶಮಾಡುವವು

1 ಪೆತೂವೇಲನ ಮಗನಾದ ಯೋವೇಲನು
ಯೆಹೋವನಿಂದ ಈ ಸಂದೇಶವನ್ನು ಪಡೆದನು.

2 ನಾಯಕರೇ, ಈ ಸಂದೇಶಕ್ಕೆ ಕಿವಿಗೊಡಿರಿ. ದೇಶ
ದಲ್ಲಿ ವಾಸಿಸುವ ಎಲ್ಲಾ ಜನರೇ, ನನ್ನ ಮಾತು
ಗಳನ್ನು ಆಲೈಸಿರಿ. ನಿಮ್ಮ ಜೀವಮಾನಕಾಲದಲ್ಲಿ
ಇಂಥಾ ಸಂಗತಿ ಎಂದಾದರೂ ಸಂಭವಿಸಿ
ದೆಯೋ? ಇಲ್ಲ! ನಿಮ್ಮ ತಂದೆಗಳ ಕಾಲದಲ್ಲಿ
ಯಾದರೂ ಇಂಥಾ ಸಂಗತಿಗಳು ಸಂಭವಿಸಿ
ದೆಯೋ? ಇಲ್ಲ!
3 ಇವುಗಳನ್ನು ನೀವು ನಿಮ್ಮ ಮಕ್ಕಳಿಗೆ ತಿಳಿಸುವಿರಿ.
ಮತ್ತು ನಿಮ್ಮ ಮಕ್ಕಳು ಅವರ ಮಕ್ಕಳಿಗೆ ತಿಳಿಸು
ವರು. ಮತ್ತು ನಿಮ್ಮ ಮೊಮ್ಮಕ್ಕಳು ಅವರ
ನಂತರದ ಪೀಳಿಗೆಗೆ ತಿಳಿಸುವರು.
4 ಚೂರಿ ಮಿಡಿತೆ ತಿಂದು ಬಿಟ್ಟದ್ದನ್ನು ಗುಂಪು
ಮಿಡಿತೆ ತಿಂದಿತು. ಗುಂಪು ಮಿಡಿತೆ ತಿಂದು ಬಿಟ್ಟ
ದ್ದನ್ನು ಹಾರುವ ಮಿಡಿತೆ ತಿಂದಿತು. ಹಾರುವ
ಮಿಡಿತೆ ತಿಂದು ಉಳಿದದ್ದನ್ನು ನಾಶಮಾಡುವ
ಮಿಡಿತೆ ತಿಂದು ಬಿಟ್ಟಿತು.

## ಮಿಡಿತೆಗಳು ಆಗಮಿಸಿದವು

5 ಅಮಲೇರಿದವರೇ, ಎಚ್ಚರಗೊಂಡು ಅಳಿರಿ.
ದ್ರಾಕ್ಷಾರಸವನ್ನು ಕುಡಿಯುವವರೇ, ಅಳಿರಿ.
ಯಾಕೆಂದರೆ ನಿಮ್ಮ ಸಿಹಿಯಾದ ದ್ರಾಕ್ಷಾರಸವು
ಮುಗಿದು ಹೋಯಿತು. ಆ ದ್ರಾಕ್ಷಾರಸದ
ಸವಿಯು ನಿಮಗೆ ಇನ್ನು ಸಿಗದು.
6 ನನ್ನ ಜನಾಂಗಕ್ಕೆ ವಿರುದ್ಧವಾಗಿ ಬಲಶಾಲಿಯಾದ
ದೊಡ್ಡ ರಾಜ್ಯವು ಯುದ್ಧಕ್ಕೆ ಬರುವದು. ಅವರ
ಸೈನಿಕರನ್ನು ಲೆಕ್ಕಿಸಲು ಸಾಧ್ಯವಿಲ್ಲ. ಆ ಮಿಡಿತೆ
ಗಳಂತಿರುವ ಸೈನಿಕರು ನಿಮ್ಮನ್ನು ಸೀಳಿ
ಬಿಡುವರು. ಅವರ ಹಲ್ಲುಗಳು ಸಿಂಹದ
ಹಲ್ಲಿನಂತಿವೆ.
7 ಆ ಮಿಡಿತೆಗಳು ನನ್ನ ದ್ರಾಕ್ಷಿತೋಟದ ಹಣ್ಣುಗ
ಳನ್ನೆಲ್ಲಾ ತಿಂದುಬಿಡುವವು. ನನ್ನ ಅಂಜೂರದ
ಮರಗಳನ್ನು ನಾಶ ಮಾಡುವವು. ನನ್ನ ಮರಗಳ
ತೊಗಟೆಗಳನ್ನು ಮಿಡಿತೆಗಳು ತಿಂದು ಬಿಡುವವು.
ಅದರ ಕೊಂಬೆಗಳು ಬಿಳುಪಾಗುವವು. ಮರ
ಗಳು ನಾಶವಾಗುವವು.

## ಜನರು ಬೊಬ್ಬಿಡುತ್ತಾರೆ

8 ಮದುವೆಯಾಗಲಿಕ್ಕಿರುವ ಗಂಡನು ಸತ್ತ ವಧುವು
ಬೊಬ್ಬಿಡುವಂತೆ ನೀವು ಬೊಬ್ಬಿಡಿರಿ.
9 ಯಾಜಕರೇ, ಯೆಹೋವನ ಸೇವಕರೇ, ಬೊಬ್ಬಿ
ಡಿರಿ. ಯಾಕಂದರೆ ಇನ್ನು ಮುಂದೆ ಯೆಹೋವನ
ಆಲಯದಲ್ಲಿ ಪಾನ ಮತ್ತು ಧಾನ್ಯಾರ್ಪಣೆ
ಇರದು.
10 ಹೊಲ ಗದ್ದೆಗಳೆಲ್ಲಾ ನಾಶವಾದವು.
ಭೂಮಿಯೂ ಗೋಳಾಡುತ್ತಿರುವುದು. ಯಾಕೆಂ
ದರೆ ಧಾನ್ಯವು ನಾಶವಾದವು. ಹೊಸ ದ್ರಾಕ್ಷಾ
ರಸವು ಬತ್ತಿಹೋಯಿತು. ಎಣ್ಣೆಯು ಇಲ್ಲದೆ
ಹೋಯಿತು.
11 ರೈತರೇ, ದುಃಖಿಸಿರಿ, ದ್ರಾಕ್ಷಿತೋಟ ಮಾಡಿದ
ವರೇ, ಗಟ್ಟಿಯಾಗಿ ಬೊಬ್ಬಿಡಿರಿ. ಗೋಧಿಗಾ
ಗಿಯೂ, ಜವೆಗೋಧಿಗಾಗಿಯೂ ಅಳಿರಿ.
ಯಾಕಂದರೆ ಬೆಳೆಯು ನಾಶವಾಯಿತು.
12 ದ್ರಾಕ್ಷಿ ಬಳ್ಳಿಗಳು ಒಣಗಿ ಹೋಗಿವೆ ಮತ್ತು
ಅಂಜೂರದ ಮರವು ಸಾಯುತ್ತಲಿದೆ.
ದಾಳಿಂಬದ ಮರ, ಖರ್ಜೂರದ ಮರ, ಸೇಬಿನ
ಮರ, ತೋಟದಲ್ಲಿರುವ ಎಲ್ಲಾ ಮರಗಳು
ಒಣಗಿ ಹೋಗಿವೆ. ಜನರಲ್ಲಿರುವ ಸಂತೋಷವೂ
ಬತ್ತಿಹೋಗಿದೆ.
13 ಯಾಜಕರೇ, ನೀವು ನಿಮ್ಮ ಶೋಕವಸ್ತ್ರವನ್ನು
ಧರಿಸಿ ಗಟ್ಟಿಯಾಗಿ ರೋಧಿಸಿರಿ. ವೇದಿಕೆಯಲ್ಲಿ
ಸೇವೆ ಮಾಡುವವರೇ, ಗಟ್ಟಿಯಾಗಿ ರೋಧಿಸಿರಿ.
ನನ್ನ ದೇವರ ಸೇವಕರೇ, ನೀವು ನಿಮ್ಮ ಶೋಕ

ವಸ್ತ್ರಗಳಲ್ಲಿಯೇ ನಿದ್ರೆ ಮಾಡಿರಿ. ಯಾಕೆಂದರೆ
ಇನ್ನು ದೇವಾಲಯದಲ್ಲಿ ಧಾನ್ಯ ಮತ್ತು ಪಾನ
ಸಮರ್ಪಣೆ ಇಲ್ಲ.

### ಮಿಡಿತೆಗಳ ಭಯಂಕರ ನಾಶನ

14ಉಪವಾಸ ದಿನವನ್ನು ಗೊತ್ತುಪಡಿಸಿರಿ. ಆ ದಿನಕ್ಕಾಗಿ
ಜನರನ್ನು ಒಟ್ಟುಗೂಡಿಸಿರಿ. ದೇಶದಲ್ಲಿ ವಾಸವಾಗಿರುವ
ನಾಯಕರುಗಳೆಲ್ಲರನ್ನೂ ಜನರನ್ನೂ ಒಟ್ಟುಗೂಡಿಸಿರಿ;
ನಿಮ್ಮ ದೇವರಾದ ಯೆಹೋವನ ಆಲಯಕ್ಕೆ ಅವರನ್ನೆಲ್ಲ
ಪ್ರಾರ್ಥನೆಗಾಗಿ ಕರೆದುಕೊಂಡು ಬನ್ನಿರಿ.

15ಶೋಕಿಸಿರಿ. ಯಾಕೆ? ಯಾಕೆಂದರೆ ಯೆಹೋವನ
ಮಹಾದಿನವು ಹತ್ತಿರ ಬಂತು. ಆ ಸಮಯದಲ್ಲಿ ಸರ್ವಶಕ್ತ
ನಾದ ದೇವರ ಸನ್ನಿಧಾನದಿಂದ ದಂಡನೆಯು ಬರುವುದು.
16ನಮಗೆ ಆಹಾರವು ಇಲ್ಲದೆ ಹೋಯಿತು. ಆನಂದವೂ
ಸಂತೋಷವೂ ನಮ್ಮ ದೇವಾಲಯದಿಂದ ಹೊರಟು
ಹೋದವು. 17ನಾವು ಬೀಜ ಬಿತ್ತಿದೆವು. ಆದರೆ ಅವು
ಒಣಗಿ, ಸತ್ತು ಈಗ ನೆಲದ ಮೇಲೆ ಬಿದ್ದಿವೆ. ನಮ್ಮ ಗಿಡಗ
ಳೆಲ್ಲಾ ಒಣಗಿ ಸತ್ತಿವೆ. ನಮ್ಮ ಉಗ್ರಾಣವು ಬರಿದಾಗಿದ್ದು
ಬೀಳುತ್ತಲಿದೆ.

18ಪ್ರಾಣಿಗಳು ಹಸಿವಿನಿಂದ ನರಳಾಡುತ್ತಿವೆ. ಪ್ರಾಣಿ ಗಳ
ಹಿಂಡು ಗಲಿಬಿಲಿಗೊಂಡು ಅಡ್ಡಾಡುತ್ತವೆ. ಅವುಗಳಿಗೆ
ತಿನ್ನಲು ಹುಲ್ಲು ಇಲ್ಲ. ಕುರಿಗಳು ಸಾಯುತ್ತಿವೆ.
19ಯೆಹೋವನೇ, ಸಹಾಯಕ್ಕಾಗಿ ನಾನು ನಿನಗೆ ಮೊರೆ
ಯಿಡುತ್ತಿದ್ದೇನೆ. ನಮ್ಮ ಹಸಿರು ಹೊಲಗದ್ದೆಗಳು ಬೆಂಕಿ
ಯಿಂದ ಮರುಭೂಮಿಯಾದವು. ಹೊಲದಲ್ಲಿದ್ದ ಮರ
ಗಳನ್ನೆಲ್ಲಾ ಬೆಂಕಿಯು ದಹಿಸಿತು. 20ಕಾಡು ಪ್ರಾಣಿಗಳೂ
ಬಾಯಾರಿ ನಿನ್ನ ಕಡೆಗೆ ನೋಡುತ್ತಿವೆ. ನೀರಿನ ತೊರೆಗಳು
ಬತ್ತಿ ಹೋಗಿವೆ. ನೀರೇ ಇಲ್ಲ. ನಮ್ಮ ಹಸಿರು ಹುಲ್ಲು
ಗಾವಲು ಬೆಂಕಿಯ ದೆಸೆಯಿಂದ ಮರುಭೂಮಿ
ಯಾಗಿರುತ್ತದೆ.

### ಬರಲಿಕ್ಕಿರುವ ಯೆಹೋವನ ದಿನ

2 ಚೀಯೋನಿನಲ್ಲಿ ತುತ್ತೂರಿಯನ್ನೂದು. ನನ್ನ
ಪವಿತ್ರ ಪರ್ವತದಲ್ಲಿ ಧ್ವನಿಯೆತ್ತಿ ಎಚ್ಚರಿಕೆ
ನೀಡಿರಿ. ದೇಶದಲ್ಲಿ ವಾಸಿಸುವ ಎಲ್ಲಾ ಜನರು
ಭಯದಿಂದ ನಡುಗಲಿ. ಯೆಹೋವನ ಮಹಾ
ದಿನವು ಬರಲಿದೆ; ಯೆಹೋವನ ಮಹಾದಿನವು
ಹತ್ತಿರವೇ ಇದೆ.
2 ಆ ದಿನವು ಕರಾಳ ದಿನ. ಮೋಡದಿಂದ ತುಂಬಿದ
ದಿನವಾಗಿದೆ. ಅಂದು ಸೂರ್ಯೋದಯದ
ಸಮಯದಲ್ಲಿ ಪರ್ವತದಲ್ಲಿ ಹರಡಿದ ಸೈನ್ಯವನ್ನು
ನೀನು ನೋಡುವೆ. ಅದು ಬಲಿಷ್ಟವಾದ ಮಹಾ
ಸೈನ್ಯ. ಅಂಥ ಸೈನ್ಯವು ಹಿಂದೆಂದೂ ಇರಲಿಲ್ಲ.
ಇನ್ನು ಮುಂದೆಯೂ ಇರುವುದಿಲ್ಲ.
3 ಆ ಸೈನ್ಯವು ಸುಡುವ ಬೆಂಕಿಯಂತೆ ದೇಶವನ್ನು
ನಾಶಮಾಡುವದು. ಏದೇನ್ ತೋಟದಂತೆ
ಕಂಗೊಳಿಸುತ್ತದ್ದ ದೇಶವು ಅದು ಬಂದಮೇಲೆ
ಬೆಂಗಾಡಿನಂತಿರುವದು. ಅವರಿಂದ ಯಾರೂ
ತಪ್ಪಿಸಿಕೊಳ್ಳಲಾರರು.
4 ಅವರು ಕುದುರೆಯಂತೆ ಕಾಣುವರು, ಯುದ್ಧದ
ಕುದುರೆಯಂತೆ ಓಡುವರು.
5 ಕಿವಿಗೊಟ್ಟು ಕೇಳು. ಪರ್ವತಗಳ ಮೇಲೆ ಓಡುವ
ರಥಗಳ ಶಬ್ದದಂತೆ ಅವರ ಶಬ್ದವು ಕೇಳುತ್ತದೆ.
ಬೆಂಕಿಯ ಜ್ವಾಲೆಗಳು ಹೊಟ್ಟನ್ನು ಸುಡುವಂತೆ
ಅವರ ಶಬ್ದವು ಕೇಳುತ್ತದೆ. ಬಲಿಷ್ಠರಾದ ಅವರು
ಯುದ್ಧಕ್ಕೆ ಸಿದ್ಧರಾಗಿದ್ದಾರೆ.
6 ಈ ಸೈನ್ಯವನ್ನು ನೋಡುವ ಜನರು ಹೆದರಿ ನಡು
ಗುವರು; ಅವರ ಮುಖಗಳು ಕೆಂಗೆಡುವದು.
7 ಆ ಸೈನಿಕರು ವೇಗವಾಗಿ ಓಡುವರು; ಗೋಡೆ
ಹತ್ತುವರು. ನೇರವಾಗಿ ಮುಂದೆ ಹೋಗುವರು.
ದಾರಿಯಿಂದ ಅತ್ತಿತ್ತ ಹೋಗರು;
8 ಒಬ್ಬರ ಮೇಲೊಬ್ಬರು ಬೀಳದೆ ಪ್ರತಿಯೊಬ್ಬ ಸೈನಿ
ಕನು ತನ್ನ ದಾರಿಯಲ್ಲಿಯೇ ಮುಂದುವರಿಯು
ವನು. ಒಬ್ಬ ಸೈನಿಕನಿಗೆ ಗಾಯವಾಗಿ ಬಿದ್ದರೂ
ಉಳಿದವರು ನಿಲ್ಲದೆ ಮುಂದಕ್ಕೆ ನುಗ್ಗುತ್ತಾ
ಇರುವರು.
9 ಅವರು ಪಟ್ಟಣದ ಕಡೆಗೆ ಓಡಿ ತ್ವರೆಯಾಗಿ
ಗೋಡೆ ಹತ್ತುವರು. ಮನೆಯೊಳಗೆ ನುಗ್ಗುವರು;
ಕಳ್ಳರಂತೆ ಕಿಟಕಿಯಿಂದ ನುಸುಳುವರು.
10 ಅವರ ಮುಂದೆ ಭೂಮಿಯೂ ಆಕಾಶವೂ
ನಡುಗುವುದು; ಸೂರ್ಯಚಂದ್ರರು ಕಪ್ಪಾಗಿ
ಹೋಗುವರು; ನಕ್ಷತ್ರಗಳು ಹೊಳಪನ್ನು ಕಳೆದು
ಕೊಳ್ಳುವುದು.
11 ಯೆಹೋವನು ತನ್ನ ಸೈನ್ಯವನ್ನು ಮಹಾಧ್ವನಿ
ಯಿಂದ ಕರೆಯುತ್ತಾನೆ. ಆತನ ಶಿಬಿರವು ದೊಡ್ಡ
ದಾಗಿದೆ. ಆ ಸೈನ್ಯವು ಆತನ ಆಜ್ಞೆಯನ್ನು ಪಾಲಿಸು
ತ್ತದೆ; ಆ ಸೈನ್ಯವು ಮಹಾ ಬಲಿಷ್ಠವಾಗಿದೆ.
ಯೆಹೋವನ ಮಹಾ ದಿನವು ಮಹಾ ಭಯಂ
ಕರವಾದ ದಿನವಾಗಿದೆ. ಅದನ್ನು ಸಹಿಸಲು
ಯಾರಿಗೂ ಸಾಧ್ಯವಿಲ್ಲ.

### ಜನರು ಬದಲಾಗಬೇಕೆಂದು ಯೆಹೋವನು ಹೇಳುತ್ತಾನೆ

12 ಇದು ಯೆಹೋವನ ಸಂದೇಶ: ‘‘ನಿಮ್ಮ ಪೂರ್ಣ

ಹೃದಯದಿಂದ ನನ್ನ ಬಳಿಗೆ ಬನ್ನಿರಿ, ನೀವು
ದುಷ್ಟತ್ವವನ್ನು ನಡಿಸಿರುವದರಿಂದ ದುಃಖಿಸಿರಿ,
ಅಳಿರಿ, ಉಪವಾಸ ಮಾಡಿರಿ.
13 ನಿಮ್ಮ ಬಟ್ಟೆಗಳನ್ನಲ್ಲ, ಹೃದಯವನ್ನು ಹರಿ
ಯಿರಿ.'' ನಿಮ್ಮ ದೇವರಾದ ಯೆಹೋವನ ಬಳಿಗೆ
ಬನ್ನಿರಿ. ಆತನು ದಯಾಪರನೂ ಕನಿಕರವುಳ್ಳ
ವನೂ ಆಗಿದ್ದಾನೆ. ಆತನು ಬೇಗನೇ ಕೋಪಿಸು
ವುದಿಲ್ಲ. ಆತನಲ್ಲಿ ಆಳವಾದ ಪ್ರೀತಿ ಇದೆ. ಆತನು
ಯೋಚಿಸಿದ ಶಿಕ್ಷೆಯನ್ನು ಒಂದು ವೇಳೆ ನಿಮಗೆ
ಕೊಡದೆ ತನ್ನ ಮನಸ್ಸನ್ನು ಬದಲಾಯಿಸಾನು.
14 ಒಂದು ವೇಳೆ ಯೆಹೋವನು ತನ್ನ ಮನಸ್ಸನ್ನು
ಬದಲಾಯಿಸಿದರೂ ಬದಲಾಯಿಸಾನು,
ಹೇಳಲು ಬರುವುದಿಲ್ಲ. ಒಂದು ವೇಳೆ ಆತನು
ನಿಮಗಾಗಿ ಆಶೀರ್ವಾದವನ್ನು ಬಿಟ್ಟು ಹೋಗ
ಬಹುದು. ಆಗ ನೀನು ದೇವರಾದ ಯೆಹೋವ
ನಿಗೆ ಧಾನ್ಯ ಮತ್ತು ಪಾನ ಸಮರ್ಪಣೆ ಮಾಡುವಿ.

## ಯೆಹೋವನಿಗೆ ಪ್ರಾರ್ಥಿಸಿರಿ

15 ಚೀಯೋನಿನಲ್ಲಿ ತುತ್ತೂರಿ ಊದಿರಿ. ವಿಶೇಷ
ಕೂಟಕ್ಕಾಗಿ ಜನರನ್ನು ಕೂಡಿಸಿರಿ. ಉಪವಾಸದ
ದಿನ ಗೊತ್ತು ಮಾಡಿರಿ.
16 ವಿಶೇಷ ಕೂಟಕ್ಕಾಗಿ ಜನರನ್ನು ಒಟ್ಟಾಗಿ ಕೂಡಿ
ಸಿರಿ. ಪ್ರಾಯಸ್ಥರನ್ನು ಕೂಡಿಸಿರಿ. ಮಕ್ಕಳನ್ನೂ
ಕೂಡಿಸಿರಿ. ಮೊಲೆಹಾಲುಕುಡಿಯುವ ಶಿಶುಗ
ಳನ್ನೂ ಒಟ್ಟಾಗಿ ಸೇರಿಸಿರಿ. ವಧುವರರು ತಮ್ಮ
ಶೋಭನದ ಕೋಣೆಯಿಂದ ಹೊರಬರಲಿ.
17 ಯೆಹೋವನ ಸೇವಕರಾದ ಯಾಜಕರು ಮಂಟ
ಪಕ್ಕೂ ವೇದಿಕೆಗೂ ಮಧ್ಯದಲ್ಲಿ ಗೋಳಾಡಲಿ. ಆ
ಜನರೆಲ್ಲಾ ಹೀಗೆ ಹೇಳಬೇಕು, ''ಯೆಹೋವನೇ,
ನಿನ್ನ ಜನರ ಮೇಲೆ ಕರುಣೆ ಇಡು, ನಿನ್ನ ಜನರನ್ನು
ನಾಚಿಕೆಗೆ ತುತ್ತಾಗುವಂತೆ ಮಾಡಬೇಡ. ನಿನ್ನ
ಜನರ ವಿಷಯವಾಗಿ ಅನ್ಯಜನರು ಗೇಲಿ ಮಾಡ
ದಿರಲಿ. ಇತರ ದೇಶದ ಜನರು ನಮಗೆ ಹಾಸ್ಯ
ಮಾಡುತ್ತಾ, 'ಅವರ ದೇವರು ಎಲ್ಲಿ?' ಎಂದು
ಹೇಳದ ಹಾಗೆ ಮಾಡು.''

## ಯೆಹೋವನು ದೇಶವನ್ನು ಸುಸ್ಥಿತಿಗೆ ತರುವನು

18 ಆಗ ಯೆಹೋವನು ತನ್ನ ದೇಶದ ಬಗ್ಗೆ ಆಸಕ್ತಿ
ತೋರಿಸುವನು. ತನ್ನ ಜನರ ಬಗ್ಗೆ ದುಃಖಿಸಿದನು.
19 ಯೆಹೋವನು ತನ್ನ ಜನರೊಂದಿಗೆ ಮಾತನಾಡಿ
ಹೀಗೆ ಹೇಳಿದನು: ''ನಾನು ನಿಮಗೆ ಧಾನ್ಯ,
ದ್ರಾಕ್ಷಾರಸ, ಎಣ್ಣೆಯನ್ನು ಕಳುಹಿಸುವೆನು.
ನಿಮಗೆ ಬೇಕಾದಷ್ಟು ಇರುವದು. ಅನ್ಯ ಜನಾಂಗ
ದವರೆದುರು ನಿಮ್ಮನ್ನು ಇನ್ನು ಮುಂದೆ ನಾಚಿಕೆಗೆ
ಗುರಿಪಡಿಸುವುದಿಲ್ಲ.
20 ಉತ್ತರದಿಂದ ಬಂದ ದಂಡನ್ನು ನಿಮ್ಮ ದೇಶ
ದಿಂದ ಹೊರಡಿಸುವೆನು. ಅವರನ್ನು ಒಣ
ಬೆಂಗಾಡಿಗೆ ಕಳುಹಿಸುವೆನು. ಅವರಲ್ಲಿ ಕೆಲವರು
ಪೂರ್ವದ ಸಮುದ್ರಕ್ಕೆ ಹೋಗುವರು, ಕೆಲವರು
ಪಶ್ಚಿಮದ ಸಮುದ್ರಕ್ಕೆ ಹೋಗುವರು. ಅವರು
ಭಯಂಕರ ಕೃತ್ಯಗಳನ್ನು ಮಾಡಿದುದರಿಂದ ಸತ್ತು
ಕೊಳೆಯುವ ಸ್ಥಿತಿಗೆ ಬರಮಾಡುವೆನು. ಆಗ
ಭಯಂಕರ ಹೊಲಸು ವಾಸನೆ ಇರುವದು.''

## ದೇಶವು ಹೊಸತಾಗಿ ಮಾಡಲ್ಪಡುವದು

21 ದೇಶವೇ, ಭಯಪಡದಿರು. ಯೆಹೋವನು
ಮಹತ್ಕಾರ್ಯವನ್ನು ಮಾಡಲಿಕ್ಕಿರುವದರಿಂದ
ಸಂತೋಷದಿಂದ ಆನಂದಿಸು.
22 ಅಡವಿಯಲ್ಲಿರುವ ಪ್ರಾಣಿಗಳೇ, ಭಯಪಡ
ಬೇಡಿ. ಮರುಭೂಮಿಯು ಹುಲ್ಲುಗಾವಲಾಗು
ವದು. ಮರಗಳು ಹಣ್ಣುಗಳನ್ನು ಬಿಡುವವು.
ಅಂಜೂರದ ಮರಗಳೂ ದ್ರಾಕ್ಷಿಬಳ್ಳಿಗಳೂ
ತುಂಬಾ ಹಣ್ಣುಗಳನ್ನು ಬಿಡುವವು.
23 ಆದುದರಿಂದ ಚೀಯೋನಿನ ಜನರೇ,
ಸಂತೋಷಪಡಿರಿ. ನಿಮ್ಮ ದೇವರಾದ
ಯೆಹೋವನಲ್ಲಿ ಸಂತೋಷಿಸಿರಿ. ಆತನು ನಿಮಗೆ
ಮಳೆ ಸುರಿಸುವನು. ಹಿಂದಿನಂತೆ ನಿಮಗೆ
ಮುಂಗಾರು, ಹಿಂಗಾರು ಮಳೆಗಳನ್ನು
ಸುರಿಸುವನು.
24 ಕಣಜಗಳು ಗೋಧಿಯಿಂದ ತುಂಬಿರುವವು.
ಪಿಪಾಯಿಗಳು ಎಣ್ಣೆಯಿಂದಲೂ, ದ್ರಾಕ್ಷಾರಸ
ದಿಂದಲೂ ತುಂಬಿತುಳುಕುವವು.
25 ''ಯೆಹೋವನಾದ ನಾನು ನಿಮಗೆ ವಿರುದ್ಧವಾಗಿ
ನನ್ನ ಸೈನ್ಯವನ್ನು ಕಳುಹಿಸಿದೆನು. ಮಿಡಿತೆಗಳ
ಗುಂಪು, ದೊಡ್ಡ ಮಿಡಿತೆ, ನಾಶಮಾಡುವ
ಮಿಡಿತೆ, ಹಾರುವ ಮಿಡಿತೆ, ಚೂರಿ ಮಿಡಿತೆಗಳು
ಬಂದು ನಿಮಗಿದ್ದುದ್ದನ್ನೆಲ್ಲಾ ತಿಂದುಬಿಟ್ಟವು.
ಆದರೆ ಯೆಹೋವನಾದ ನಾನು ನಿಮ್ಮ ಸಂಕಟ
ಕಾಲಕ್ಕೆ ಬದಲಾಗಿ ಸುಭಿಕ್ಷಕಾಲವನ್ನು ದಯ
ಪಾಲಿಸುವೆನು.
26 ಆಗ ನಿಮಗೆ ತಿನ್ನಲು ಏನೂ ಕಡಿಮೆ ಇರು
ವುದಿಲ್ಲ. ನೀವು ಸಂತೃಪ್ತರಾಗುವಿರಿ. ನಿಮ್ಮ
ದೇವರಾದ ಯೆಹೋವನ ನಾಮವನ್ನು

ಕೊಂಡಾಡುವಿರಿ. ಆತನು ನಿಮಗೆ ಆಶ್ಚರ್ಯ
ವಾದ ಕಾರ್ಯವನ್ನು ಮಾಡಿದ್ದಾನೆ. ನನ್ನ ಜನರು
ಇನ್ನು ಮುಂದೆ ಎಂದೂ ನಾಚಿಕೆಗೆ ಗುರಿ
ಯಾಗರು.
27 ಇಸ್ರೇಲರೊಂದಿಗೆ ನಾನು ಇದ್ದೇನೆ ಎಂದು ನೀವು
ತಿಳಿಯುವಿರಿ. ನಿಮ್ಮ ದೇವರಾದ ಯೆಹೋವನು
ನಾನೇ ಎಂದು ನೀವು ತಿಳಿಯುವಿರಿ. ನನ್ನ
ಹೊರತು ಬೇರೆ ದೇವರುಗಳಿಲ್ಲ. ನನ್ನ ಜನರು
ಇನ್ನು ಮುಂದೆ ನಾಚಿಕೆಗೆ ಗುರಿಯಾಗುವುದಿಲ್ಲ.

### ದೇವರು ಎಲ್ಲಾ ಜನರ ಮೇಲೆ ತನ್ನ ಆತ್ಮವನ್ನು ಸುರಿಸುವನು

28 ‘‘ಆ ಬಳಿಕ ನಾನು ನನ್ನ ಆತ್ಮವನ್ನು ಎಲ್ಲಾ ತರದ
ಜನರ ಮೇಲೆ ಸುರಿಸುವೆನು. ನಿಮ್ಮ ಗಂಡು ಹೆಣ್ಣು
ಮಕ್ಕಳು ಪ್ರವಾದಿಸುವರು. ನಿಮ್ಮ ವೃದ್ಧರು ಕನಸು
ಕಾಣುವರು. ನಿಮ್ಮ ಯುವಕರಿಗೆ ದರ್ಶನಗ
ಳಾಗುವವು.
29 ಆ ಸಮಯದಲ್ಲಿ ಸೇವಕ ಸೇವಕಿಯರ
ಮೇಲೆಯೂ ನನ್ನ ಆತ್ಮವನ್ನು ಸುರಿಸುವೆನು.
30 ಭೂಮಿ ಆಕಾಶಗಳಲ್ಲಿ ವಿಚಿತ್ರ ಸಂಗತಿಗಳನ್ನು
ನಾನು ತೋರಿಸುವೆನು. ಅಲ್ಲಿ ರಕ್ತ, ಬೆಂಕಿ ಮತ್ತು
ದಪ್ಪದ ಹೊಗೆಯು ಇರುವದು.
31 ಸೂರ್ಯನು ಕತ್ತಲಾಗುವನು, ಚಂದ್ರನು ರಕ್ತ
ದಂತಾಗುವನು. ಆಗ ಯೆಹೋವನ ಭಯಂಕರ
ದಿನವು ಬರುವುದು.
32 ಆಗ ಯೆಹೋವನ ಹೆಸರನ್ನು ಹೇಳಿಕೊಳ್ಳುವವ
ರೆಲ್ಲರೂ ರಕ್ಷಿಸಲ್ಪಡುವರು. ಚೀಯೋನ್
ಪರ್ವತದಲ್ಲಿಯೂ ಜೆರುಸಲೇಮಿನಲ್ಲಿಯೂ
ರಕ್ಷಿಸಲ್ಪಟ್ಟ ಜನರಿರುವರು. ಯೆಹೋವನು
ಹೇಳಿದ ಪ್ರಕಾರವೇ ಇದು ಆಗುವುದು. ಉಳಿದ
ಜನರಲ್ಲಿ ಯೆಹೋವನು ಕರೆದಿರುವ ಜನರು
ಸೇರಿಕೊಂಡಿರುವರು.

### ಯೆಹೂದದ ವೈರಿಗೆ ಯೆಹೋವನ ಶಿಕ್ಷೆಯ ವಾಗ್ದಾನ

3 ‘‘ಆ ಸಮಯದಲ್ಲಿ ನಾನು ಯೆಹೂದ ಮತ್ತು ಜೆರುಸ
ಲೇಮನ್ನು ಸೆರೆಯಿಂದ ಹಿಂದಕ್ಕೆ ತರಿಸುವೆನು.
2ಮತ್ತು ಎಲ್ಲಾ ಜನಾಂಗಗಳನ್ನು ನಾನು ಒಟ್ಟುಗೂಡಿಸು
ವೆನು. ಆ ದೇಶಗಳನ್ನು ಯೆಹೋಷಾಫಾಟ್ ತಗ್ಗಿಗೆ ಕರೆ
ತರುವೆನು. ಅಲ್ಲಿ ಅವರಿಗೆ ನ್ಯಾಯತೀರಿಸುವೆನು. ಆ ದೇಶ
ಗಳವರು ನನ್ನ ಜನರಾದ ಇಸ್ರೇಲರನ್ನು ಚದರಿಸಿದ್ದರು.
ಅವರನ್ನು ಪರದೇಶಗಳಲ್ಲಿ ವಾಸಿಸುವಂತೆ ಮಾಡಿದರು.
ಆದುದರಿಂದ ಆ ದೇಶಗಳವರನ್ನು ನಾನು ಶಿಕ್ಷಿಸುವೆನು.
ಆ ದೇಶದವರು ನನ್ನ ದೇಶವನ್ನು ವಿಭಜಿಸಿದರು. 3ನನ್ನ
ಜನರಿಗಾಗಿ ಚೀಟು ಹಾಕಿದರು. ಒಂದು ಹುಡುಗನನ್ನು
ಮಾರಿ ಸೂಳೆಯನ್ನು ಕೊಂಡುಕೊಂಡರು. ಅವರು
ದ್ರಾಕ್ಷಾರಸವನ್ನು ಕುಡಿಯುವದಕ್ಕಾಗಿ ಹುಡುಗಿಯನ್ನು
ಮಾರಿದರು.
4‘‘ತೂರೇ, ಸೀದೋನೇ, ಫಿಲಿಷ್ಟಿಯ ದೇಶಗಳೇ,
ನೀವು ನನಗೆ ಎಷ್ಟರವರು? ನಾನು ಮಾಡಿದುದಕ್ಕೆ ನೀವು
ನನ್ನನ್ನು ಶಿಕ್ಷಿಸುತ್ತೀರಾ? ನೀವು ಒಂದು ವೇಳೆ ನನ್ನನ್ನು
ಶಿಕ್ಷಿಸುತ್ತಿದ್ದೀರಿ ಎಂದು ನೆನಸಬಹುದು. ಆದರೆ ನಾನು
ಬೇಗನೇ ನಿಮ್ಮನ್ನು ಶಿಕ್ಷಿಸುವೆನು. 5ನೀವು ನನ್ನ ಬೆಳ್ಳಿ
ಬಂಗಾರವನ್ನು ಕದ್ದುಕೊಂಡು ಹೋದಿರಿ. ನನ್ನ
ಅಮೂಲ್ಯವಾದ ಸಂಪತ್ತನ್ನು ಕೊಂಡು ಹೋಗಿ ನಿಮ್ಮ
ಪೂಜಾಸ್ಥಳಗಳಲ್ಲಿ ಇಟ್ಟಿರಿ.
6‘‘ನೀವು ಯೆಹೂದ ಮತ್ತು ಜೆರುಸಲೇಮಿನ ಜನರನ್ನು
ಗ್ರೀಕರಿಗೆ ಮಾರಿಬಿಟ್ಟಿರಿ. ಆ ರೀತಿಯಾಗಿ ಅವರನ್ನು ಅವರ
ದೇಶದಿಂದ ಬಹಳ ದೂರ ತೆಗೆದುಬಿಟ್ಟಿರಿ. 7ಆ ದೂರದ
ಸ್ಥಳಗಳಿಗೆ ನನ್ನ ಜನರನ್ನು ಕಳುಹಿಸಿದಿರಿ. ಆದರೆ ನಾನು
ಅವರನ್ನು ಹಿಂದೆ ತರುವೆನು. ಮತ್ತು ನೀನು ಮಾಡಿದ
ಕೃತ್ಯಕ್ಕೆ ನಾನು ನಿನ್ನನ್ನು ಶಿಕ್ಷಿಸುವೆನು. 8ನಿನ್ನ ಗಂಡು ಹೆಣ್ಣು
ಮಕ್ಕಳನ್ನು ನಾನು ಯೆಹೂದದ ಜನರಿಗೆ ಮಾರುವೆನು.
ಅವರು ಅವರನ್ನು ಬಹುದೂರದಲ್ಲಿ ಶೆಬದ ಜನರಿಗೆ
ಮಾರಿಬಿಡುವರು.’’ ಇದು ಯೆಹೋವನ ನುಡಿ.

### ಯುದ್ಧಕ್ಕೆ ತಯಾರಾಗು

9 ಜನಾಂಗದವರಿಗೆ ಇದನ್ನು ಪ್ರಕಟಿಸು, ‘ಯುದ್ಧಕ್ಕೆ
ತಯಾರಾಗಿರಿ’ ಶೂರರನ್ನು ಎಚ್ಚರಿಸಿರಿ. ಯುದ್ಧ
ವೀರರು ಹತ್ತಿರಕ್ಕೆ ಬರಲಿ; ಅವರು ಬರಲಿ!
10 ನಿಮ್ಮ ನೇಗಿಲ ಗುಳಗಳನ್ನು ಕತ್ತಿಯನ್ನಾಗಿ
ಮಾಡಿರಿ. ಕುಡುಗೋಲುಗಳಿಂದ ಬರ್ಜಿಯನ್ನು
ಮಾಡಿರಿ, ನಿಮ್ಮ ಬಲಹೀನನಾದ ಸೈನಿಕನು,
‘ನಾನು ಬಲಶಾಲಿ’ ಅನ್ನಲಿ.
11 ಎಲ್ಲಾ ಜನಾಂಗದವರೇ, ತ್ವರೆಪಡಿರಿ. ಆ ಸ್ಥಳದಲ್ಲಿ
ಒಟ್ಟು ಸೇರಿರಿ. ಯೆಹೋವನೇ, ನಿನ್ನ ಬಲಶಾಲಿ
ಯಾದ ಸೈನಿಕರನ್ನು ಬರಮಾಡು.
12 ಜನಾಂಗಗಳೇ, ಎಚ್ಚರಗೊಳ್ಳಿರಿ! ಯೆಹೋಷಾ
ಫಾಟ್ ತಗ್ಗಿಗೆ ಬನ್ನಿರಿ. ಸುತ್ತಲಿರುವ ಜನಾಂಗಗ
ಳಿಗೆ ತೀರ್ಪುಕೊಡಲು ನಾನು ಅಲ್ಲಿ ಕುಳಿತು
ಕೊಳ್ಳುವೆನು.
13 ಬೆಳೆಯು ಪಕ್ವವಾಗಿದೆ; ಕುಡುಗೋಲನ್ನು ತನ್ನಿರಿ.
ಬನ್ನಿ, ದ್ರಾಕ್ಷಿಯನ್ನು ಆಲೆಯಲ್ಲಿ ತುಳಿಯಿರಿ,
ಯಾಕೆಂದರೆ ಆಲೆಯು ತುಂಬಿಹೋಗಿದೆ.
ಪೀಪಾಯಿಗಳು ತುಂಬಿ ತುಳುಕುತ್ತಿವೆ,

ಯಾಕೆಂದರೆ ಅವರ ದುಷ್ಟತ್ವವು ವಿಪರೀತ
ವಾಗಿದೆ!
14 ತೀರ್ಮಾನದ ತಗ್ಗಿನಲ್ಲಿ ಅನೇಕರು ಸೇರಿದ್ದಾರೆ.
ಯೆಹೋವನ ವಿಶೇಷ ದಿನವು ತೀರ್ಮಾನದ
ತಗ್ಗಿನ ಹತ್ತಿರ ಬಂದಿದೆ.
15 ಸೂರ್ಯ ಚಂದ್ರರು ಕತ್ತಲಾಗುವರು, ನಕ್ಷತ್ರ
ಗಳು ಹೊಳೆಯುವುದಿಲ್ಲ.
16 ಚೀಯೋನಿನಿಂದ ದೇವರಾದ ಯೆಹೋವನು
ಆರ್ಭಟಿಸುವನು. ಜೆರುಸಲೇಮಿನಿಂದ ಆತನು
ಗರ್ಜಿಸುವನು. ಆಗ ಭೂಮ್ಯಾಕಾಶಗಳು ನಡು
ಗುವವು. ಆದರೆ ಯೆಹೋವನ ಜನರಿಗೆ ಆತನೇ
ಆಶ್ರಯ ಸ್ಥಳವಾಗುವನು. ಆತನು ಇಸ್ರೇಲರಿಗೆ
ಸುರಕ್ಷಿತ ಸ್ಥಳವಾಗುವನು.
17 ‘‘ಆಗ ನಾನು ನಿಮ್ಮ ದೇವರಾದ ಯೆಹೋವನು
ಎಂದು ಅರಿತುಕೊಳ್ಳುವಿರಿ. ನಾನು ನನ್ನ ಪವಿತ್ರ
ಪರ್ವತವಾದ ಚೀಯೋನಿನಲ್ಲಿ ವಾಸಿಸುವೆನು.
ಜೆರುಸಲೇಮ್ ಪರಿಶುದ್ಧವಾಗುವದು. ಪರ
ದೇಶಿಗಳು ಇನ್ನು ಮುಂದೆ ಅದನ್ನು ದಾಟಿ
ಹೋಗುವುದಿಲ್ಲ.’’

### ಯೆಹೂದಕ್ಕೆ ಒಂದು ಹೊಸ ಜೀವಿತದ ವಾಗ್ದಾನ

18 ‘‘ಆ ದಿವಸ ಸಿಹಿ ದ್ರಾಕ್ಷಾರಸವು ಬೆಟ್ಟಗಳಿಂದ ಹರಿ
ಯುವುದು. ಬೆಟ್ಟಗಳಲ್ಲಿ ಹಾಲು ಹರಿಯು
ವುದು. ಮತ್ತು ಯೆಹೂದದ ಬತ್ತಿದ ನದಿಗಳಲ್ಲಿ
ನೀರು ತುಂಬಿ ಹರಿಯುವದು. ಯೆಹೋವನ
ಆಲಯದಿಂದ ಬುಗ್ಗೆಯು ಹೊರಡುವದು.
ಅಕಾಶಿಯ ಕಣಿವೆಗೆ ನೀರನ್ನು ಕೊಡುವದು.
19 ಈಜಿಪ್ಟ್ ಬರಿದಾಗುವದು. ಎದೋಮು ಬೆಂಗಾ
ಡಾಗುವದು. ಯಾಕೆಂದರೆ ಅವರು ಯೆಹೂದದ
ಜನರೊಂದಿಗೆ ಕ್ರೂರರೀತಿಯಲ್ಲಿ ವರ್ತಿಸಿದರು.
ಅವರ ದೇಶಗಳಲ್ಲಿ ನಿರಪರಾಧಿಗಳನ್ನು
ಕೊಂದರು.
20 ಆದರೆ ಯೆಹೂದದಲ್ಲಿ ಯಾವಾಗಲೂ ಜನರು
ವಾಸಿಸುವರು. ಅನೇಕ ತಲೆಮಾರಿನವರೆಗೆ
ಜನರು ಜೆರುಸಲೇಮಿನಲ್ಲಿ ವಾಸಿಸುವರು.
21 ಆ ಜನರು ನನ್ನ ಜನರನ್ನು ಕೊಂದರು. ಆದುದ
ರಿಂದ ನಾನು ನಿಜವಾಗಿಯೂ ಅವರನ್ನು ಶಿಕ್ಷಿಸು
ವೆನು.’’ ಯಾಕೆಂದರೆ ದೇವರಾದ ಯೆಹೋ
ವನು ಚೀಯೋನಿನಲ್ಲಿ ವಾಸಿಸುವನು.

# ಆಮೋಸ

## ಪರಿಚಯ

1 ಇದು ಆಮೋಸನ ಸಂದೇಶ. ಇವನು ತೆಕೋವ ಎಂಬ ಪಟ್ಟಣದ ಕುರುಬರಲ್ಲೊಬ್ಬನು. ಯೆಹೂದದ ಅರಸನಾದ ಉಜ್ಜೀಯನ ಆಳ್ವಿಕೆಯ ಸಮಯದಲ್ಲಿ ಮತ್ತು ಅದೇ ಸಮಯದಲ್ಲಿ ಯೋವಾಷನ ಮಗನಾದ ಯಾರೊಬ್ಬಾಮನು ಇಸ್ರೇಲನ್ನು ಆಳುತ್ತಿರುವಾಗ ಆಮೋಸನಿಗೆ ದೈವ ದರ್ಶನಗಳುಂಟಾದವು. ಭೂಕಂಪವಾಗುವುದಕ್ಕಿಂತ ಎರಡು ವರುಷಗಳಿಗೆ ಮೊದಲು ಈ ದರ್ಶನಗಳಾದವು.

## ಅರಾಮ್ಯರಿಗೆ ಶಿಕ್ಷೆ

2 ಆಮೋಸನು ಹೇಳಿದ್ದೇನಂದರೆ, ಚೀಯೋನಿನಲ್ಲಿ
ಯೆಹೋವನು ಸಿಂಹದಂತೆ ಗರ್ಜಿಸುವನು. ಜೆರುಸ
ಲೇಮಿನಿಂದ ಆರ್ಭಟಿಸುತ್ತಾನೆ. ಆಗ ಕುರುಬರ
ಹಸಿರು ಹುಲ್ಲುಗಾವಲು ಕಂದು ಬಣ್ಣತಾಳಿ
ಸಾಯುವುದು. ಕರ್ಮೆಲ್ ಬೆಟ್ಟವು ಒಣಗಿ
ಬರಡಾಗುವುದು.

3 ಯೆಹೋವನು ಹೇಳುವದೇನೆಂದರೆ, ''ದಮಸ್ಕದ
ವರು ನಡಿಸಿದ ಅನೇಕ ಅಪರಾಧಗಳ ನಿಮಿತ್ತವಾಗಿ ನಾನು
ಖಂಡಿತವಾಗಿಯೂ ಅವರನ್ನು ಶಿಕ್ಷಿಸುವೆನು. ಯಾಕೆಂದರೆ
ಅವರು ಗಿಲ್ಯಾದಿನ ಜನರನ್ನು ಒಕ್ಕಣೆಗೆ ಉಪಯೋಗಿಸುವ
ಕಬ್ಬಿಣದ ಸಲಕರಣೆಗಳಿಂದ ಜಜ್ಜಿಬಿಟ್ಟರು. 4 ಆದರೆ ನಾನು
ಹಜಾಯೇಲನ ನಿವಾಸದಲ್ಲಿ ಬೆಂಕಿಯನ್ನು ಪ್ರಾರಂಭಿಸು
ವೆನು. ಅದು ಬೆನ್ಹದದನ ಭವ್ಯ ಅರಮನೆಗಳನ್ನೆಲ್ಲಾ
ಸುಟ್ಟುಹಾಕುವದು.
5 ''ನಾನು ದಮಸ್ಕದ ಹೆಬ್ಬಾಗಿಲುಗಳನ್ನೂ ಒಡೆದು
ಹಾಕುವೆನು; ಆವೆನ್ ಕಣಿವೆಯಲ್ಲಿ ಸಿಂಹಾಸನದ ಮೇಲೆ
ಕುಳಿತುಕೊಳ್ಳುವವನನ್ನು ತೆಗೆದುಬಿಡುವೆನು; ಬೇತ್
ಎದೆನ್‌ನಲ್ಲಿರುವ ಸಾಮರ್ಥ್ಯದ ಗುರುತನ್ನು ಕಿತ್ತು ಹಾಕು
ವೆನು. ಆಗ ಅರಾಮ್ಯರು ಸೋಲಿಸಲ್ಪಟ್ಟವರಾಗಿ ಕಿರ್
ಎಂಬಲ್ಲಿಗೆ ಕೊಂಡೊಯ್ಯುವರು. ಇದು ಯೆಹೋವನ
ನುಡಿ.''

## ಫಿಲಿಷ್ಟಿಯರಿಗೆ ಶಿಕ್ಷೆ

6 ಯೆಹೋವನು ಹೇಳುವದೇನಂದರೆ, ''ಗಾಜದ ಜನ
ರನ್ನು ಅವರು ಮಾಡಿದ ಅಪರಾಧಗಳ ನಿಮಿತ್ತ ಖಂಡಿತ
ವಾಗಿಯೂ ಶಿಕ್ಷಿಸುವೆನು. ಯಾಕೆಂದರೆ ಅವರು ಒಂದು
ಇಡೀ ಜನಾಂಗವನ್ನೇ ಎದೋಮಿಗೆ ಗುಲಾಮರನ್ನಾಗಿ
ಕಳುಹಿಸಿದರು. 7 ಅದಕ್ಕಾಗಿ ನಾನು ಗಾಜದ ಗೋಡೆಯ
ಮೇಲೆ ಬೆಂಕಿಯನ್ನು ಕಳುಹಿಸುವೆನು. ಈ ಬೆಂಕಿಯು
ಗಾಜದ ಎತ್ತರವಾದ ಗೋಪುರಗಳನ್ನು ನಾಶ ಮಾಡು
ವದು. 8 ಇದಲ್ಲದೆ, ನಾನು ಅಷ್ಡೋದಿನಲ್ಲಿ ಸಿಂಹಾಸನದ
ಮೇಲೆ ಕುಳಿತುಕೊಳ್ಳುವವನನ್ನು ನಾಶಮಾಡುವೆನು;
ಅಷ್ಕೆಲೋನಿನಲ್ಲಿ ರಾಜದಂಡ ಹಿಡಿಯುವವನನ್ನು ನಾಶ
ಮಾಡುವೆನು; ಎಕ್ರೋನಿನ ಜನರನ್ನು ಶಿಕ್ಷಿಸುವೆನು.
ಆಮೇಲೆ ಅಳಿದುಳಿದ ಫಿಲಿಷ್ಟಿಯರು ಸಾಯುವರು.''
ಇದು ಯೆಹೋವನ ನುಡಿ.

## ತೂರಿಗೆ ಶಿಕ್ಷೆ

9 ಯೆಹೋವನು ಹೇಳುವದೇನಂದರೆ, ''ಅನೇಕ ಅಪ
ರಾಧಗಳನ್ನು ಮಾಡಿದ ತೂರಿನ ಜನರನ್ನು ನಾನು ಖಂಡಿತ
ವಾಗಿ ಶಿಕ್ಷಿಸುವೆನು. ಯಾಕೆಂದರೆ ಅವರು ಒಂದು
ಜನಾಂಗದ ಜನರನ್ನೆಲ್ಲಾ ಗುಲಾಮರನ್ನಾಗಿ ಎದೋಮಿಗೆ
ಕಳುಹಿಸಿದರು. ಅವರು ತಮ್ಮ ಸಹೋದರರೊಂದಿಗೆ
(ಇಸ್ರೇಲಿನೊಂದಿಗೆ) ಮಾಡಿದ ಒಡಂಬಡಿಕೆಯನ್ನು
ಮರೆತುಬಿಟ್ಟರು. 10 ಆದುದರಿಂದ ನಾನು ತೂರಿನ
ಗೋಡೆಯ ಮೇಲೆ ಬೆಂಕಿಯನ್ನು ಹಾಕುವೆನು. ಆ
ಬೆಂಕಿಯು ತೂರಿನ ಎತ್ತರವಾದ ಬುರುಜುಗಳನ್ನು ನಾಶ
ಮಾಡುವದು.''

## ಎದೋಮ್ಯರಿಗೆ ಶಿಕ್ಷೆ

11 ಯೆಹೋವನು ಹೇಳುವದೇನಂದರೆ, ''ಅನೇಕ ಅಪ
ರಾಧಗಳನ್ನು ಮಾಡಿದ ಎದೋಮ್ಯರನ್ನು ನಾನು ಖಂಡಿತ
ವಾಗಿ ಶಿಕ್ಷಿಸುವೆನು. ಯಾಕೆಂದರೆ ಎದೋಮ್ ತನ್ನ
ಸಹೋದರನಾದ ಇಸ್ರೇಲನ್ನು ಕತ್ತಿಯಿಂದ ಹತಿಸಿತು.
ಎದೋಮ್ ಯಾವ ಕರುಣೆಯನ್ನೂ ತೋರಲಿಲ್ಲ.

ಅದರ ಕೋಪವು ನಿರಂತರವಾಗಿ ಮುಂದುವರಿಯಿತು;
ಕ್ರೂರ ಪ್ರಾಣಿಯಂತೆ ಇಸ್ರೇಲನ್ನು ಹರಿದು ಹರಿದು
ಹಾಕಿತು. 12ಆದುದರಿಂದ ನಾನು ತೇಮಾನಿನಲ್ಲಿ ಬೆಂಕಿ
ಯನ್ನು ಹಾಕುವೆನು. ಆ ಬೆಂಕಿಯು ಬೋಚ್ರದ ಉನ್ನತ
ಗೋಪುರಗಳನ್ನು ನಾಶಮಾಡುವದು.’’

## ಅಮ್ಮೋನಿಯರಿಗೆ ಶಿಕ್ಷೆ

13ಯೆಹೋವನು ಹೇಳುವದೇನೆಂದರೆ, ‘‘ಅನೇಕಾ
ನೇಕ ಅಪರಾಧಗಳನ್ನು ಮಾಡಿದ ಅಮ್ಮೋನಿಯರನ್ನು
ನಾನು ಖಂಡಿತವಾಗಿಯೂ ಶಿಕ್ಷಿಸುತ್ತೇನೆ. ಯಾಕೆಂದರೆ
ಅವರು ಗಿಲ್ಯಾದಿನ ಗರ್ಭಿಣಿ ಸ್ತ್ರೀಯರನ್ನು ಕೊಂದರು.
ಆ ಪ್ರಾಂತ್ಯವನ್ನು ಕೈವಶಮಾಡಿಕೊಂಡು ತಮ್ಮ ದೇಶವನ್ನು
ವಿಸ್ತಾರ ಮಾಡುವುದಕ್ಕಾಗಿ ಅವರು ಹೀಗೆ ಮಾಡಿದರು.
14ಆದುದರಿಂದ ನಾನು ರಬ್ಬದ ಗೋಡೆಗಳಲ್ಲಿ ಬೆಂಕಿ
ಹಾಕುವೆನು. ಆ ಬೆಂಕಿಯು ರಬ್ಬದ ಉನ್ನತ ಗೋಪುರಗ
ಳನ್ನು ನಾಶಮಾಡುವದು; ಹಗಲಿನ ಯುದ್ಧದ ಕೂಗಾಟ
ದಂತೆಯೂ ಸುಂಟರ ಗಾಳಿಯಂತೆಯೂ ಸಂಕಟವು
ಅವರ ದೇಶಕ್ಕೆ ಬರುವದು. 15ಆಗ ಅವರ ಅರಸನು ಮತ್ತು
ನಾಯಕರು ಸೆರೆ ಹಿಡಿಯಲ್ಪಡುವರು. ಅವರನ್ನೆಲ್ಲ ಒಟ್ಟಿಗೆ
ಕೊಂಡೊಯ್ಯಲಾಗುವುದು.’’ ಈ ಸಂಗತಿಗಳನ್ನೆಲ್ಲ
ಯೆಹೋವನು ತಿಳಿಸಿದನು.

## ಮೋವಾಬ್ಯರಿಗೆ ಶಿಕ್ಷೆ

2 ಯೆಹೋವನು ಹೇಳುವದೇನಂದರೆ, ‘‘ಮೋವಾ
ಬ್ಯರು ಅನೇಕ ಅಪರಾಧಗಳನ್ನು ಮಾಡಿದ್ದರಿಂದ
ನಾನು ಖಂಡಿತವಾಗಿಯೂ ಅವರನ್ನು ಶಿಕ್ಷಿಸುವೆನು.
ಎದೋಮ್ಯರ ಅರಸನ ಎಲುಬುಗಳನ್ನು ಮೋವಾಬ್ಯರು
ಸುಟ್ಟು ಸುಣ್ಣವಾಗಿ ಮಾಡಿದರು. 2ಆದುದರಿಂದ
ಮೋವಾಬಿನಲ್ಲಿ ನಾನು ಬೆಂಕಿಯನ್ನು ಹಾಕುವೆನು. ಅದು
ಕೆರಿಯೋತಿನ ಉನ್ನತ ಗೋಪುರಗಳನ್ನು ನಾಶಮಾಡು
ವದು. ಅಲ್ಲಿ ಭಯಂಕರವಾದ ಕೂಗಾಟವೂ ತುತ್ತೂ
ರಿಯ ಧ್ವನಿಯೂ ಇರುತ್ತವೆ. ಆಗ ಮೋವಾಬು ಸಾಯು
ವದು. 3ಹೀಗೆ ನಾನು ಮೋವಾಬಿನ ಅರಸರಿಗೆ ಅಂತ್ಯವನ್ನು
ಮಾಡುವೆನು. ಮೋವಾಬಿನ ಎಲ್ಲಾ ನಾಯಕರುಗಳನ್ನು
ಸಾಯಿಸುವೆನು’’ ಇದು ಯೆಹೋವನ ನುಡಿ.

## ಯೆಹೂದಕ್ಕೆ ಶಿಕ್ಷೆ

4ಯೆಹೋವನು ಹೇಳುವುದೇನಂದರೆ, ‘‘ಯೆಹೂದ
ಜನರ ಅನೇಕ ಅಪರಾಧಗಳಿಗಾಗಿ ಅವರನ್ನು ಖಂಡಿತ
ವಾಗಿಯೂ ದಂಡಿಸುವೆನು. ಯಾಕೆಂದರೆ ಅವರು ನನ್ನ
ಆಜ್ಞೆಗಳನ್ನು ಅನುಸರಿಸಲಿಲ್ಲ. ನನ್ನ ಕಟ್ಟಳೆಗಳಿಗೆ ವಿಧೇಯ
ರಾಗಲಿಲ್ಲ. ಅವರ ಪೂರ್ವಿಕರು ಸುಳ್ಳನ್ನು ನಂಬಿದರು.
ಆ ಸುಳ್ಳುಗಳಿಂದ ಅವರು ನನ್ನನ್ನು ಹಿಂಬಾಲಿಸಲಿಲ್ಲ.
5ಆದುದರಿಂದ ನಾನು ಯೆಹೂದದಲ್ಲಿ ಬೆಂಕಿಯನ್ನು
ಹಚ್ಚುವೆನು; ಆ ಬೆಂಕಿಯು ಜೆರುಸಲೇಮಿನ ಉನ್ನತ
ಬುರುಜುಗಳನ್ನು ನಾಶಮಾಡುವದು.’’

## ಇಸ್ರೇಲಿನ ಶಿಕ್ಷೆ

6ಯೆಹೋವನು ಹೇಳುವದೇನೆಂದರೆ, ‘‘ಅನೇಕ ಅಪ
ರಾಧಗಳನ್ನು ಮಾಡಿದ ಇಸ್ರೇಲಿನ್ನು ನಾನು ಖಂಡಿತ
ವಾಗಿಯೂ ದಂಡಿಸುವೆನು. ಯಾಕೆಂದರೆ ಅವರು ಸ್ವಲ್ಪ
ಬೆಳ್ಳಿಗಾಗಿ ಒಳ್ಳೆಯವರನ್ನೂ ಮತ್ತು ನಿರಪರಾಧಿಗಳನ್ನೂ
ಮಾರಿದರು; ಒಂದು ಜೊತೆ ಕೆರಗಳ ಕ್ರಯಕ್ಕೆ ಬಡ
ಜನರನ್ನು ಮಾರಿದರು. 7ಆ ಬಡಜನರ ಮುಖವನ್ನು
ನೆಲದ ಮೇಲೆ ದೂಡಿ ಅವರ ಮೇಲೆ ನಡೆದರು. ಕಷ್ಟ
ಅನುಭವಿಸುವ ಜನರ ಮೊರೆಯನ್ನು ಅವರು ಲಾಲಿಸದೆ
ಹೋದರು. ತಂದೆಗಳೂ ಗಂಡುಮಕ್ಕಳೂ ಒಬ್ಬ ತರುಣಿ
ಯೊಂದಿಗೇ ಲೈಂಗಿಕ ಸಂಬಂಧವನ್ನಿಟ್ಟುಕೊಂಡರು. ನನ್ನ
ಪವಿತ್ರನಾಮವನ್ನು ಹಾಳುಮಾಡಿದರು. 8ಬಡಜನರ ಬಟ್ಟೆ
ಗಳನ್ನು ತೆಗೆದುಕೊಂಡು ತಾವು ವೇದಿಕೆಯ ಮೇಲೆ ಯಜ್ಞ
ಮಾಡುತ್ತಿರುವಾಗ ಆ ಬಟ್ಟೆಗಳ ಮೇಲೆ ಕುಳಿತು
ಕೊಳ್ಳುವರು. ಬಡವರಿಗೆ ಸಾಲಕೊಟ್ಟು ಅವರ ಬಟ್ಟೆ
ಗಳನ್ನು ಒತ್ತೆಗೆ ತೆಗೆದುಕೊಳ್ಳುವರು. ಅವರು ಜನರಿಗೆ
ದಂಡ ವಿಧಿಸಿ, ಆ ಹಣದಿಂದ ದ್ರಾಕ್ಷಾರಸವನ್ನು ಕೊಂಡು
ಕೊಂಡು ದೇವರ ಆಲಯದಲ್ಲಿ ಕುಡಿಯುವರು.
9‘‘ಆದರೆ ಅವರ ಎದುರಿನಲ್ಲಿ ಅಮೋರಿಯರನ್ನು ನಾಶ
ಮಾಡಿದವನು ನಾನೇ, ಅಮೋರಿಯರು ದೇವದಾರು
ಮರಗಳಂತೆ ಎತ್ತರವೂ, ಅಲ್ಲೋನ್ ಮರಗಳಂತೆ ಬಲ
ಶಾಲಿಗಳೂ ಆಗಿದ್ದರು. ಆದರೆ ನಾನು ಕೆಳಗಿನಿಂದ ಅವರ
ಬೇರನ್ನೂ ಮೇಲಿನಿಂದ ಅವರ ಫಲಗಳನ್ನೂ ನಾಶ
ಮಾಡಿದೆನು.
10‘‘ಈಜಿಪ್ಟ್ ದೇಶದಿಂದ ನಿಮ್ಮನ್ನು ಹೊರತಂದವನು
ನಾನೇ. ನಲವತ್ತು ವರ್ಷಗಳ ತನಕ ನಾನು ಅಡವಿಯಲ್ಲಿ
ನಿಮ್ಮನ್ನು ನಡಿಸಿದೆನು. ನಾನು ಅಮ್ಮೋರಿಯರ ದೇಶ
ವನ್ನು ಸ್ವಾಧೀನಪಡಿಸಲು ಅವರಿಗೆ ಸಹಾಯ ಮಾಡಿದೆನು.
11ನಿಮ್ಮ ಕೆಲವು ಗಂಡು ಮಕ್ಕಳನ್ನು ನಾನು ಪ್ರವಾದಿಗಳ
ನ್ನಾಗಿ ಮಾಡಿದೆನು. ಇನ್ನು ಕೆಲವರನ್ನು ನಾಜೀರೆಯರ
ನ್ನಾಗಿ ಮಾಡಿದೆನು. ಇಸ್ರೇಲ್ ಜನರೇ, ಇವು ಸತ್ಯವಾದ
ಮಾತುಗಳು,’’ ಇವು ಯೆಹೋವನ ನುಡಿಗಳು. 12‘‘ಆದರೆ
ನೀವು ನಾಜೀರರನ್ನು ದ್ರಾಕ್ಷಾರಸ ಕುಡಿಯುವಂತೆ ಮಾಡಿ
ದಿರಿ. ಪ್ರವಾದಿಗಳನ್ನು ಪ್ರವಾದಿಸಬೇಡಿ ಎಂದು ಹೇಳಿದಿರಿ.
13ನೀವು ನನಗೆ ಬಹು ಭಾರವಾಗಿದ್ದೀರಿ. ಬಂಡಿಯಲ್ಲಿ
ಒತ್ತಿ ತುಂಬಿಸಿದಾಗ ಹೇಗೆ ಬಗ್ಗುತ್ತದೋ ಅದೇ

ರೀತಿಯಲ್ಲಿ ನಾನು ಬಹುವಾಗಿ ಬಗ್ಗಿರುತ್ತೇನೆ. ಆದರೆ
ನಾನು ನಿಮ್ಮನ್ನು ಅದೇ ರೀತಿಯಲ್ಲಿ ಬಗ್ಗಿಸುತ್ತೇನೆ.*
14ಯಾರೂ ತಪ್ಪಿಸಿಕೊಳ್ಳಲಾರರು. ಅತಿ ವೇಗವಾದ
ಓಟಗಾರರೂ ತಪ್ಪಿಸಿಕೊಳ್ಳಲಾರರು. ಬಲಶಾಲಿಗಳಿಗೂ
ಶಕ್ತಿಸಾಲದು. ಸಿಪಾಯಿಗಳಿಗೂ ತಮ್ಮನ್ನು ಕಾಪಾಡಿಕೊಳ್ಳ
ಲಾಗದು. 15ಬಿಲ್ಲುಬಾಣ ಹಿಡಿದಿರುವವರೂ ಉಳಿ
ಯರು. ವೇಗದ ಓಟಗಾರರು ತಪ್ಪಿಸಿಕೊಳ್ಳಲು ಸಾಧ್ಯ
ವಿಲ್ಲ. ಕುದುರೆ ಮೇಲಿನ ಸವಾರರು ಜೀವಸಹಿತ ತಪ್ಪಿಸಿ
ಕೊಳ್ಳುವುದಿಲ್ಲ. ಆ ಸಮಯದಲ್ಲಿ ಅತಿ ಧೈರ್ಯಶಾಲಿ
ಗಳೂ ರಣವೀರರೂ ಓಡಿಬಿಡುವರು. ತಮ್ಮ ಬಟ್ಟೆಗಳನ್ನು
ಧರಿಸಿಕೊಳ್ಳಲೂ ಅವರಿಗೆ ಸಮಯವಿರುವುದಿಲ್ಲ.'' ಇವು
ಯೆಹೋವನ ನುಡಿ.

### ಇಸ್ರೇಲಿಗೆ ಎಚ್ಚರಿಕೆಯ ಮಾತು

3 ಇಸ್ರೇಲಿನ ಜನರೇ, ಈ ಸಂದೇಶಕ್ಕೆ ಕಿವಿಗೊಡಿರಿ!
ನಿಮ್ಮ ವಿಷಯವಾಗಿ ಯೆಹೋವನು ಹೀಗೆ ಹೇಳಿ
ದ್ದಾನೆ. ಇಸ್ರೇಲೇ, ಇದು ನಾನು ಈಜಿಪ್ಟ್‌ನಿಂದ ಬಿಡಿಸಿ
ಕೊಂಡು ಬಂದ ಎಲ್ಲಾ ಕುಟುಂಬಗಳವರ (ಇಸ್ರೇಲ್)
ವಿಷಯವಾದ ಸಂದೇಶ. 2''ಈ ಭೂಮುಖದಲ್ಲಿ ಅನೇಕ
ಕುಟುಂಬಗಳಿವೆ. ಅವರೆಲ್ಲರಲ್ಲಿ ನಿಮ್ಮನ್ನು ಮಾತ್ರವೇ
ನಾನು ವಿಶೇಷ ರೀತಿಯಲ್ಲಿ ಬಲ್ಲೆನು. ಆದರೆ ನೀವು ನನಗೆ
ವಿರುದ್ಧವಾದಿರಿ. ಆದುದರಿಂದ ನಾನು ನೀವು ಮಾಡಿದ
ಪಾಪಗಳಿಗೆ ನಿಮ್ಮೆಲ್ಲರನ್ನು ಶಿಕ್ಷಿಸುವೆನು.''

### ಇಸ್ರೇಲಿನ ಶಿಕ್ಷೆಯ ಕಾರಣ

3ಇಬ್ಬರು ಒಟ್ಟಾಗಿ ನಡೆಯಬೇಕಾದರೆ ಅದಕ್ಕೆ ಅವರಿ
ಬ್ಬರೂ ಒಪ್ಪಿಕೊಂಡಿರಲೇಬೇಕು. 4ಅಡವಿಯಲ್ಲಿರುವ
ಸಿಂಹವು ಪ್ರಾಣಿಯನ್ನು ಹಿಡಿದ ನಂತರವೇ ಗರ್ಜಿಸುವದು.
ಪ್ರಾಯದ ಸಿಂಹವು ತನ್ನ ಗವಿಯಲ್ಲಿ ಗರ್ಜಿಸಿದರೆ ಅದು
ಒಂದು ಪ್ರಾಣಿಯನ್ನು ಹಿಡಿಯಿತು ಎಂದು ಅರ್ಥ. 5ಬಲೆ
ಯಲ್ಲಿ ಆಹಾರ ಹಾಕದೆ ಇರುವದಾದರೆ ಪಕ್ಷಿಯು ಬಲೆ
ಯೊಳಗೆ ಸಿಕ್ಕಿಹಾಕಿ ಕೊಳ್ಳುವುದಿಲ್ಲ. ಏನೂ ಸಿಕ್ಕಿಕೊಳ್ಳದೆ
ಬೋನು ಹಾರುವದೋ? 6ತುತ್ತೂರಿಯ ಎಚ್ಚರಿಕೆಯ
ಶಬ್ಧವನ್ನು ಕೇಳಿದ ಜನರು ಖಂಡಿತವಾಗಿ ಹೆದರಿ ನಡುಗು
ವರು. ಒಂದು ಗಂಡಾಂತರವು ಪಟ್ಟಣಕ್ಕೆ ಬಂದಿರುವು
ದಾದರೆ ಅದನ್ನು ಬರಮಾಡಿದಾತನು ಯೆಹೋವನೇ.
7ನನ್ನ ಒಡೆಯನಾದ ಯೆಹೋವನು ಒಂದು ಕಾರ್ಯ
ವನ್ನು ಮಾಡಲು ನಿರ್ಧರಿಸಬಹುದು. ಆದರೆ ಆತನು ಹಾಗೆ
ಮಾಡುವ ಮುಂಚಿತವಾಗಿ ತನ್ನ ಸೇವಕರಾದ ಪ್ರವಾದಿ
ಗಳಿಗೆ ಮುಂತಿಳಿಸುವನು. 8ಸಿಂಹವು ಗರ್ಜಿಸಿದಾಗ
ಜನರಿಗೆ ಭಯವಾಗುವುದು. ಯೆಹೋವನು ಮಾತನಾಡಿ
ದಾಗ ಪ್ರವಾದಿಗಳು ಪ್ರವಾದಿಸುವರು.
9-10ಅಷ್ಡೋದ್ ಮತ್ತು ಈಜಿಪ್ಟಿನ ಉನ್ನತ
ಬುರುಜುಗಳ ಬಳಿಗೆ ಹೋಗಿ ಈ ಸಂದೇಶವನ್ನು ಸಾರಿರಿ,
''ಸಮಾರ್ಯದ ಪರ್ವತಗಳ ಬಳಿಗೆ ಬನ್ನಿರಿ. ಅಲ್ಲಿ ಒಂದು
ದೊಡ್ಡ ಗಲಿಬಿಲಿಯನ್ನು ನೋಡುವಿರಿ. ಯಾಕಂದರೆ
ಜನರಿಗೆ ಸರಿಯಾಗಿ ಜೀವಿಸುವ ರೀತಿ ಗೊತ್ತಿಲ್ಲ. ಅವರು
ಜನರೊಂದಿಗೆ ಕ್ರೂರವಾಗಿ ವರ್ತಿಸುವರು. ಬೇರೆ ಜನ
ರಿಂದ ವಸ್ತುಗಳನ್ನು ತೆಗೆದುಕೊಂಡು ಅವುಗಳನ್ನು ಉನ್ನತ
ಬುರುಜುಗಳಲ್ಲಿ ಅಡಗಿಸಿಡುವರು. ಯುದ್ಧದಲ್ಲಿ ಸೂರೆ
ಮಾಡಿದ ವಸ್ತುಗಳಿಂದ ಅವರ ಖಜಾನೆಯು
ತುಂಬಿರುವದು.''
11ಆದುದರಿಂದ ಯೆಹೋವನು ಹೇಳುವದೇನಂದರೆ,
''ಆ ದೇಶಕ್ಕೆ ಒಬ್ಬ ಶತ್ರುವು ಬರುವನು. ಅವನು ನಿಮ್ಮ
ಬಲವನ್ನೇ ಮುರಿಯುವನು. ನೀವು ಉನ್ನತ ಬುರುಜು
ಗಳಲ್ಲಿ ಅಡಿಗಿಸಿಟ್ಟಿದ್ದ ವಸ್ತುಗಳನ್ನು ಕಿತ್ತುಕೊಳ್ಳುವನು.''
12ಯೆಹೋವನು ಹೇಳುವುದೇನಂದರೆ,

''ಒಂದು ವೇಳೆ ಸಿಂಹವು ಒಂದು ಕುರಿಮರಿಯ
ಮೇಲೆ ಎರಗಿದರೆ ಕುರುಬನು ಅದನ್ನು ರಕ್ಷಿಸಲು
ಪ್ರಯತ್ನಿಸಾನು. ಆದರೆ ಕುರುಬನು ಆ ಕುರಿ
ಮರಿಯ ಒಂದು ಭಾಗವನ್ನು ಮಾತ್ರ ಕಾಪಾಡಿ
ಯಾನು. ಸಿಂಹದ ಬಾಯಿಯಿಂದ ಕುರಿಯ
ಎರಡು ಕಾಲುಗಳನ್ನೋ ಕಿವಿಯ ಒಂದು ಭಾಗ
ವನ್ನೋ ಎಳೆದು ರಕ್ಷಿಸಿಯಾನು. ಅದೇ ರೀತಿಯಲ್ಲಿ
ಬಹುತೇಕ ಇಸ್ರೇಲರು ರಕ್ಷಿಸಲ್ಪಡುವದಿಲ್ಲ.
ಸಮಾರ್ಯದಲ್ಲಿರುವ ಜನರು ತಮ್ಮ ಹಾಸಿಗೆಯ
ಒಂದು ಮೂಲೆಯನ್ನಾಗಲೀ ಅಥವಾ ಮಂಚದ
ಮೇಲಿನ ಬಟ್ಟೆಯ ಒಂದು ತುಂಡನ್ನಾಗಲೀ ಉಳಿಸಿ
ಕೊಳ್ಳುವರು.''

13ಸರ್ವಶಕ್ತನೂ, ನನ್ನ ಒಡೆಯನೂ ಆಗಿರುವ ದೇವ
ರಾದ ಯೆಹೋವನು ಹೀಗೆ ಹೇಳುತ್ತಾನೆ, ''ಯಾಕೋ
ಬನ ಕುಟುಂಬದವರಿಗೆ ಈ ವಿಷಯವನ್ನು ತಿಳಿಸು,
14ಇಸ್ರೇಲು ಪಾಪಮಾಡಿದೆ. ಅದಕ್ಕಾಗಿ ನಾನು ಅದನ್ನು
ಶಿಕ್ಷಿಸುವೆನು. ಬೇತೇಲಿನಲ್ಲಿರುವ ವೇದಿಕೆಗಳನ್ನೂ ನಾನು
ನಾಶ ಮಾಡುವೆನು. ವೇದಿಕೆಯ ಕೊಂಬುಗಳು ಮುರಿಯ
ಲ್ಪಟ್ಟು ನೆಲದ ಮೇಲೆ ಬೀಳುವವು. 15ಬೇಸಿಗೆ ಕಾಲದ
ಅರಮನೆಯೊಂದಿಗೆ ಚಳಿಗಾಲದ ಅರಮನೆಯನ್ನೂ ನಾಶ
ಮಾಡುವೆನು. ದಂತದ ಭವನಗಳನ್ನು ನಾಶಮಾಡುವೆನು.
ಇತರ ಎಷ್ಟೋ ಮನೆಗಳು ನಾಶವಾಗುವವು.'' ಇವು
ಯೆಹೋವನ ನುಡಿಗಳು.

**ಬಗ್ಗಿಸುತ್ತೇನೆ** ಬಹುಶ 'ನಾನು ನಿಮಗೆ ತೊಂದರೆ ಕೊಡುತ್ತೇನೆ.'

## ಸುಖವನ್ನು ಆಶಿಸುವ ಹೆಂಗಸರು

4 ಸಮಾರ್ಯದ ಪರ್ವತಗಳಲ್ಲಿರುವ ಬಾಷಾನಿನ ದನ
ಗಳೇ, ನನ್ನ ಮಾತಿಗೆ ಕಿವಿಗೊಡಿರಿ. ನೀವು ಬಡ
ಜನರನ್ನು ಹಿಂಸಿಸಿ ಜಜ್ಜುತ್ತೀರಿ. ನಿಮ್ಮ ಗಂಡಂದಿರ ಹತ್ತಿರ,
‘‘ನಮಗೆ ಕುಡಿಯಲಿಕ್ಕೆ ತಂದು ಕೊಡು’’ ಎಂದು
ಹೇಳುತ್ತೀರಿ.
2ನನ್ನ ಒಡೆಯನಾದ ಯೆಹೋವನು ಒಂದು ವಾಗ್ದಾನ
ಮಾಡಿರುತ್ತಾನೆ. ಆತನ ಪರಿಶುದ್ಧತೆಯ ಮೇಲೆ ಆಣೆಹಾಕಿ
ವಾಗ್ದಾನ ಮಾಡಿರುತ್ತಾನೆ. ಏನಂದರೆ ನಿಮ್ಮ ಮೇಲೆ
ಸಂಕಟಗಳು ಬರುವವು. ಜನರು ನಿಮಗೆ ಕೊಕ್ಕೆ ಸಿಕ್ಕಿಸಿ
ಕೈದಿಗಳನ್ನಾಗಿ ಮಾಡಿ ಎಳೆದುಕೊಂಡು ಹೋಗುವರು.
ನಿಮ್ಮ ಮಕ್ಕಳನ್ನು ಮೀನಿನ ಗಾಳಗಳಿಗೆ ಸಿಕ್ಕಿಸಿ ಎಳೆದು
ಕೊಂಡು ಹೋಗುವರು. 3ನಿಮ್ಮ ಪಟ್ಟಣಗಳು ನಾಶ
ವಾಗುವವು. ಗೋಡೆಯಲ್ಲಿರುವ ಬಿರುಕುಗಳ ಮೂಲಕ
ಹೆಂಗಸರು ತಪ್ಪಿಸಿಕೊಂಡು ಹೋಗಿ ಹೆಣಗಳ ರಾಶಿಯ*
ಮೇಲೆ ಬೀಳುವರು.
4ಯೆಹೋವನು ಹೀಗೆ ಹೇಳುತ್ತಾನೆ, ‘‘ಬೇತೇಲಿನಲ್ಲಿ
ಪಾಪಮಾಡು. ಗಿಲ್ಗಾಲಿಗೆ ಹೋಗಿ ಇನ್ನೂ ಹೆಚ್ಚಾಗಿ ಪಾಪ
ಮಾಡು. ನಿನ್ನ ಯಜ್ಞವನ್ನು ಮುಂಜಾನೆ ಸಮರ್ಪಿಸು.
ಮೂರು ದಿವಸಗಳ ಹಬ್ಬಕ್ಕೆ ನಿನ್ನ ಬೆಳೆಯ ಹತ್ತನೆಯ
ಒಂದು ಭಾಗವನ್ನು ತೆಗೆದುಕೊಂಡು ಬಾ. 5ಹುಳಿಹಾಕಿದ
ರೊಟ್ಟಿಗಳನ್ನು ಕೃತಜ್ಞತಾ ಹೋಮ ಮಾಡು.
ಸ್ವೇಚ್ಛೆಯಿಂದ ಕೊಡುವ ಕಾಣಿಕೆ ಬಗ್ಗೆ ಎಲ್ಲರಿಗೂ ತಿಳಿಸು.
ಇಸ್ರೇಲೇ ಅಂಥಾ ಕಾರ್ಯಗಳನ್ನು ಮಾಡಲು ನಿನಗೆ
ಇಷ್ಟ. ಆದುದರಿಂದ ಹೋಗಿ ಅದನ್ನು ಮಾಡು.’’ ಇದು
ಯೆಹೋವನ ನುಡಿ.
6‘‘ನೀನು ನನ್ನ ಬಳಿಗೆ ಬರುವಂತೆ ಅನೇಕ ಕಾರ್ಯ
ಗಳನ್ನು ಮಾಡಿದೆನು. ನಿನಗೆ ನಾನು ಊಟಕ್ಕೆ ಕೊಡಲಿಲ್ಲ.
ನಿನ್ನ ಯಾವ ಪಟ್ಟಣದಲ್ಲಿಯೂ ಆಹಾರವಿಲ್ಲ. ಆದರೂ
ನೀನು ನನ್ನ ಬಳಿಗೆ ಹಿಂದಿರುಗಿ ಬರಲಿಲ್ಲ.’’ ಇದು
ಯೆಹೋವನ ನುಡಿ.
7‘‘ನಾನು ಮಳೆಯನ್ನು ನಿಲ್ಲಿಸಿದೆನು. ಸುಗ್ಗಿಗೆ ಮೂರು
ತಿಂಗಳು ಇರುವಾಗಲೇ ಮಳೆಗೆರೆಯುವುದನ್ನು ನಿಲ್ಲಿಸಿ
ದೆನು. ಆದುದರಿಂದ ಪೈರು ಬೆಳೆಯಲಿಲ್ಲ. ಆಮೇಲೆ
ನಾನು ಒಂದು ಪಟ್ಟಣದ ಮೇಲೆ ಮಳೆ ಬೀಳುವಂತೆ ಮಾಡಿ
ದೆನು. ಬೇರೆ ಪಟ್ಟಣಗಳ ಮೇಲೆ ಬೀಳದಂತೆ ಮಾಡಿ
ದೆನು. ದೇಶದ ಒಂದು ಭಾಗದಲ್ಲಿ ಮಳೆ ಸುರಿಯಿತು.
ಇನ್ನೊಂದು ಭಾಗವು ಒಣಗಿ ಬೆಂಗಾಡಾಗಿತ್ತು. 8ಹೀಗೆ
ಎರಡು ಮೂರು ಪಟ್ಟಣಗಳ ನಿವಾಸಿಗಳು ನೀರಿಗಾಗಿ
ಇನ್ನೊಂದು ಪಟ್ಟಣಕ್ಕೆ ಕಷ್ಟಪಟ್ಟುಕೊಂಡು ಹೋದರು.
ಆದರೆ ಅಲ್ಲಿ ಎಲ್ಲರಿಗೂ ನೀರು ದೊರಕಲಿಲ್ಲ. ಹೀಗಾ
ದರೂ ನೀವು ಸಹಾಯಕ್ಕಾಗಿ ನನ್ನ ಬಳಿಗೆ ಬರಲಿಲ್ಲ.’’
ಇವು ಯೆಹೋವನ ನುಡಿಗಳು.
9‘‘ನಿಮ್ಮ ಬೆಳೆಗಳು ಸೂರ್ಯನ ಶಾಖದಿಂದಲೂ
ರೋಗದಿಂದಲೂ ಸಾಯುವಂತೆ ಮಾಡಿದೆನು. ನಿಮ್ಮ
ತೋಟಗಳನ್ನೂ ದ್ರಾಕ್ಷಿಯ ತೋಟಗಳನ್ನೂ ನಾನು ನಾಶ
ಮಾಡಿದೆನು. ಮಿಡಿತೆಗಳು ನಿಮ್ಮ ಅಂಜೂರದ ಮತ್ತು
ಆಲೀವ್ ಮರಗಳನ್ನು ತಿಂದುಬಿಟ್ಟವು. ಆದಾಗ್ಯೂ
ಸಹಾಯಕ್ಕಾಗಿ ನೀವು ನನ್ನ ಬಳಿಗೆ ಬರಲಿಲ್ಲ.’’ ಇದು
ಯೆಹೋವನ ನುಡಿ.
10‘‘ನಾನು ಈಜಿಪ್ಟಿಗೆ ವ್ಯಾಧಿಗಳನ್ನು ಹೇಗೆ ಬರಮಾಡಿ
ದೆನೋ ಹಾಗೆಯೇ ನಿಮಗೂ ಮಾಡಿದೆನು. ನಿಮ್ಮ
ಯೌವನಸ್ಥರನ್ನು ಕತ್ತಿಯಿಂದ ಕೊಂದೆನು. ನಿಮ್ಮ ಕುದುರೆ
ಗಳನ್ನು ತೆಗೆದುಕೊಂಡೆನು. ಹೆಣಗಳ ರಾಶಿಯಿಂದ ನಿಮ್ಮ
ಸ್ಥಳವು ದುರ್ವಾಸನೆಯಿಂದ ತುಂಬುವಂತೆ ಮಾಡಿದೆನು.
ಆದಾಗ್ಯೂ ನೀವು ಸಹಾಯಕ್ಕಾಗಿ ನನ್ನ ಬಳಿಗೆ ಬರಲಿಲ್ಲ.’’
ಇದು ಯೆಹೋವನ ನುಡಿ.
11‘‘ಸೊದೊಮ್ ಗೊಮೋರವನ್ನು ನಾಶಮಾಡಿದಂತೆ
ನಾನು ನಿಮ್ಮನ್ನು ನಾಶಮಾಡಿದೆನು. ಆ ನಗರಗಳು
ಸಂಪೂರ್ಣವಾಗಿ ನಾಶವಾದವು. ನೀವು ಬೆಂಕಿಯಿಂದ
ಎಳೆದ ಕೊಳ್ಳಿಯಂತಿದ್ದೀರಿ. ಆದರೂ ನೀವು ಸಹಾಯ
ಕ್ಕಾಗಿ ನನ್ನ ಬಳಿಗೆ ಬರಲಿಲ್ಲ.’’ ಇದು ಯೆಹೋವನ ನುಡಿ.
12‘‘ಆದುದರಿಂದ ಇಸ್ರೇಲೇ, ನಿನಗೆ ವಿರುದ್ಧವಾಗಿ, ಈ
ಸಂಗತಿಗಳನ್ನು ಮಾಡುತ್ತೇನೆ. ಇಸ್ರೇಲೇ ನಿನ್ನ ದೇವರನ್ನು
ಸಂಧಿಸಲು ನಿನ್ನನ್ನು ತಯಾರು ಮಾಡಿಕೋ. 13ನಾನು
ಯಾರು? ನಾನೇ ಪರ್ವತಗಳನ್ನು ನಿರ್ಮಿಸಿದಾತನು.
ನಿಮ್ಮಲ್ಲಿ ಮನಸ್ಸನ್ನು ಉಂಟುಮಾಡಿದಾತನು ನಾನೇ.
ನಾನು ಜನರಿಗೆ ಮಾತನಾಡಲು ಕಲಿಸಿದೆನು. ಕತ್ತಲೆಯನ್ನು
ಬೆಳಕು ಮಾಡಿದೆನು. ಭೂಮಿಯ ಮೇಲಿರುವ ಪರ್ವತ
ಗಳ ಮೇಲೆ ನಾನು ನಡಿಯುತ್ತೇನೆ. ನಾನು ಯಾರು?
ನನ್ನ ಹೆಸರು ಯೆಹೋವನು ಸೈನ್ಯಗಳ ದೇವರು.’’

## ಇಸ್ರೇಲಿಗಾಗಿ ದುಃಖದ ಗೀತೆ

5 ಇಸ್ರೇಲಿನ ಜನರೇ, ಈ ಹಾಡನ್ನು ಕೇಳಿರಿ. ಇದು
ನಿಮ್ಮ ಮರಣದ ಗೀತೆ.

2 ಇಸ್ರೇಲ್ ಕುಮಾರಿಯು ಬಿದ್ದಳು. ಇನ್ನು
ಎಂದಿಗೂ ಆಕೆ ಏಳುವದಿಲ್ಲ. ಆಕೆ ಒಬ್ಬಂಟಿಗಳಾಗಿ
ಧೂಳಿನ ಮೇಲೆ ಬಿದ್ದಿದ್ದಾಳೆ. ಆಕೆಯನ್ನು
ಎಬ್ಬಿಸಲು ಯಾರೂ ಇಲ್ಲ.
3 ನನ್ನ ಒಡೆಯನಾದ ಯೆಹೋವನು ಇದನ್ನು
ಹೇಳುತ್ತಾನೆ, ‘‘ಸೈನ್ಯಾಧಿಕಾರಿಗಳು ಸಾವಿರ ಮಂದಿ

---

**ಹೆಣಗಳ ರಾಶಿ** ಅಕ್ಷರಶಃ ‘‘ನಿಮ್ಮನ್ನು ಅಂತಃಪುರಕ್ಕೆ ಎಸೆಯಲಾಗುವುದು.’’

ಯೊಂದಿಗೆ ಪಟ್ಟಣದ ಹೊರಗೆ ಹೋದರೆ ನೂರು ಮಂದಿಯೊಂದಿಗೆ ಹಿಂದಿರುಗುವರು. ಸೈನ್ಯಾಧಿಕಾರಿಗಳು ನೂರು ಮಂದಿಯೊಂದಿಗೆ ಹೋದರೆ ಬರೀ ಹತ್ತು ಮಂದಿಯೊಂದಿಗೆ ಹಿಂದಿರುಗುವರು.

## ಇಸ್ರೇಲರು ಮರಳಿ ಬರುವಂತೆ ಯೆಹೋವನ ಆಗ್ರಹ

4 ಇಸ್ರೇಲ್ ಜನಾಂಗಕ್ಕೆ ಯೆಹೋವನು ಇಂತೆನ್ನುತ್ತಾನೆ: ‘‘ನನ್ನನ್ನು ಹುಡುಕುತ್ತಾ ಬಂದು ಬದುಕುವವನಾಗು.

5 ಆದರೆ ಬೇತೇಲಿನಲ್ಲಿ ಹುಡುಕಬೇಡ, ಗಿಲ್ಗಾಲಿನಲ್ಲಿ ಕಾಲಿಡಬೇಡ. ಗಡಿಯನ್ನು ದಾಟಿ ಬೇರ್ಷೆಬಕ್ಕೆ ಹೋಗಬೇಡ. ಗಿಲ್ಗಾಲಿನ ಜನರು ಕೈದಿಗಳಂತೆ ತೆಗೆಯಲ್ಪಡುವರು. ಮತ್ತು ಬೇತೇಲ್ ನಾಶ ಮಾಡಲ್ಪಡುವದು.

6 ಯೆಹೋವನ ಬಳಿಗೆ ಹೋಗು, ಆಗ ಜೀವಿಸುವಿ. ಯೆಹೋವನ ಬಳಿಗೆ ನೀನು ಹೋಗದಿದ್ದಲ್ಲಿ ಯೋಸೇಫನ ಮನೆತನಕ್ಕೆ ಬೆಂಕಿಯು ಹಿಡಿಯುವುದು. ಆ ಬೆಂಕಿಯು ಯೋಸೇಫನ ಮನೆಯನ್ನು ದಹಿಸುವದು. ಬೇತೇಲಿನಲ್ಲಿ ಅದನ್ನು ಯಾರೂ ನಂದಿಸಲಾರರು.

7-9 ನೀನು ಯೆಹೋವನ ಬಳಿಗೆ ಸಹಾಯಕ್ಕಾಗಿ ಹೋಗಬೇಕು. ದೇವರು ನಕ್ಷತ್ರ ಪುಂಜಗಳನ್ನು ನಿರ್ಮಿಸಿದ್ದಾನೆ. ಆತನು ಕತ್ತಲೆಯನ್ನು ಮುಂಜಾನೆಯ ಬೆಳಕನ್ನಾಗಿ ಮಾಡುತ್ತಾನೆ. ಹಗಲನ್ನು ಕಾರ್ಗತ್ತಲೆಯನ್ನಾಗಿ ಮಾರ್ಪಡಿಸುತ್ತಾನೆ. ಆತನು ಸಮುದ್ರದ ನೀರನ್ನು ಕರೆದು ಭೂಮಿಯ ಮೇಲೆ ಹೊಯ್ಯುತ್ತಾನೆ. ಆತನ ಹೆಸರು ಯೆಹೋವನು. ಆತನು ಒಂದು ಬಲವಾದ ನಗರವನ್ನು ರಕ್ಷಿಸಿ ಇನ್ನೊಂದನ್ನು ನಾಶನಕ್ಕೆ ಒಪ್ಪಿಸುತ್ತಾನೆ.’’

## ಇಸ್ರೇಲರು ನಡಿಸಿದ ದುಷ್ಟಕಾರ್ಯ

ನೀನು ಒಳ್ಳೆತನವನ್ನು ವಿಷಕಾರಿಯನ್ನಾಗಿ ಮಾಡಿದಿ. ನ್ಯಾಯವನ್ನು ಕೊಲೆಮಾಡಿದಿ. ಅದು ನೆಲದ ಮೇಲೆ ಬೀಳುವಂತೆ ಮಾಡಿದಿ.

10 ಪ್ರವಾದಿಗಳು ಸಾರ್ವಜನಿಕ ಸ್ಥಳಗಳಿಗೆ ಹೋಗಿ ಜನರು ಮಾಡುವ ದುಷ್ಟಕಾರ್ಯಗಳನ್ನು ಖಂಡಿಸುವರು. ಜನರು ಪ್ರವಾದಿಗಳನ್ನು ಹಗೆ ಮಾಡುವರು. ಪ್ರವಾದಿಗಳು ಒಳ್ಳೆಯದನ್ನು ಸರಳವಾದ ಸತ್ಯಗಳನ್ನು ಉಪದೇಶಿಸುವರು. ಆದರೆ ಜನರು ಅವರನ್ನು ದ್ವೇಷಿಸುವರು.

11 ನೀವು ಅನ್ಯಾಯವಾಗಿ ಜನರಿಂದ ಸುಂಕ ವಸೂಲಿ ಮಾಡುವಿರಿ. ಗೋಧಿಯ ಮೂಟೆಗಳನ್ನು ಅವರಿಂದ ಸುಲುಕೊಳ್ಳುತ್ತೀರಿ. ಕಲ್ಲುಗಳನ್ನು ಕೊರೆದು ನಿಮಗಾಗಿ ಅಂದವಾದ ಮನೆಗಳನ್ನು ಕಟ್ಟಿಸಿಕೊಳ್ಳುವಿರಿ. ಆದರೆ ಆ ಮನೆಗಳಲ್ಲಿ ನೀವು ವಾಸಿಸುವುದಿಲ್ಲ. ಸುಂದರವಾದ ದ್ರಾಕ್ಷಿ ತೋಟಗಳನ್ನು ನೆಡುವಿರಿ. ಆದರೆ ಅದರ ದ್ರಾಕ್ಷಾರಸವನ್ನು ನೀವು ಕುಡಿಯುವುದಿಲ್ಲ.

12 ಯಾಕೆ ಹೀಗೆ? ಯಾಕೆಂದರೆ ನಿನ್ನ ಅನೇಕ ಪಾಪ ಕೃತ್ಯಗಳನ್ನು ನಾನು ಬಲ್ಲೆನು. ನೀನು ಭಯಂಕರ ಪಾಪಗಳನ್ನು ಮಾಡಿದ್ದೀ. ನ್ಯಾಯವಂತರನ್ನು ಗಾಯಗೊಳಿಸಿದ್ದೀ. ಅನ್ಯಾಯ ಮಾಡಲು ಹಣವನ್ನು ತೆಗೆದುಕೊಂಡಿದ್ದೀ. ಬಡಜನರಿಗೆ ನ್ಯಾಯವನ್ನು ದೊರಕಿಸುವುದಿಲ್ಲ.

13 ಆ ಸಮಯದಲ್ಲಿ ಜ್ಞಾನಿಗಳಾದ ಬೋಧಕರು ಸುಮ್ಮನಿರುವರು. ಯಾಕೆಂದರೆ ಅದು ಕೆಟ್ಟ ಸಮಯವಾಗಿರುತ್ತದೆ.

14 ದೇವರು ನಿಮ್ಮೊಂದಿಗಿದ್ದಾನೆಂದು ನೀವು ಹೇಳುತ್ತೀರಿ. ಆದುದರಿಂದ ನೀವು ಕೆಟ್ಟಕಾರ್ಯವನ್ನು ಮಾಡದೆ ಒಳ್ಳೆಯ ಕೃತ್ಯಗಳನ್ನು ಮಾಡಬೇಕು. ಆಗ ನೀವು ಬದುಕುವಿರಿ. ಸರ್ವಶಕ್ತನಾದ ಯೆಹೋವನು ನಿಮ್ಮ ಬಳಿಯಲ್ಲಿ ಖಂಡಿತವಾಗಿಯೂ ಇರುವನು.

15 ದುಷ್ಟತನವನ್ನು ದ್ವೇಷಿಸಿ ಒಳ್ಳೇತನವನ್ನು ಪ್ರೀತಿಸು. ನಿಮ್ಮ ನ್ಯಾಯಾಲಯಗಳಲ್ಲಿ ನ್ಯಾಯವನ್ನು ಸ್ಥಾಪಿಸಿರಿ. ಆಗ ಒಂದು ವೇಳೆ ಸರ್ವಶಕ್ತನಾದ ಯೆಹೋವನು ಯೋಸೇಫನ ವಂಶದಲ್ಲಿ ಉಳಿದವರಿಗೆ ದಯೆತೋರಿಸಾನು.

## ಮಹಾ ಶೋಕದ ದಿನಗಳು ಬರುವವು

16 ನನ್ನ ಒಡೆಯನಾದ ಸರ್ವಶಕ್ತನಾದ ಯೆಹೋವನು ಹೇಳುವುದೇನಂದರೆ, ‘‘ಸಾರ್ವಜನಿಕ ಸ್ಥಳಗಳಲ್ಲಿ ಜನರು ಗೋಳಾಡುವರು. ರಸ್ತೆ ಬದಿಗಳಲ್ಲಿ ಜನರು ಗೋಳಾಡುವರು. ಪಟ್ಟಣದ ನಿವಾಸಿಗಳು ತಮ್ಮೊಂದಿಗೆ ಗೋಳಾಡಲು ರೈತರನ್ನು ಆಹ್ವಾನಿಸುವರು. ಅಳುವವರನ್ನು ಬಾಡಿಗೆಗೆ ಕರೆದುಕೊಂಡು ಬರುವರು.

17 ದ್ರಾಕ್ಷಿತೋಟಗಳಲ್ಲಿ ಜನರು ಅಳುವರು. ಯಾಕೆ? ಯಾಕೆಂದರೆ ನಾನು ಹಾದುಹೋಗುತ್ತಾ ನಿಮ್ಮನ್ನು ಶಿಕ್ಷಿಸುವೆನು.’’ ಇದು ಯೆಹೋವನ ನುಡಿ.

18 ನಿಮ್ಮಲ್ಲಿ ಕೆಲವರಿಗೆ ಯೆಹೋವನ ನ್ಯಾಯಾತೀರ್ಪಿನ ದಿನವನ್ನು ನೋಡುವ ಮನಸ್ಸಿದೆ. ಆ ದಿವಸವನ್ನು ಯಾಕೆ ನೀವು ನೋಡಬೇಕು?

ಯೆಹೋವನ ನ್ಯಾಯತೀರ್ಪಿನ ದಿನವು ಬೆಳಕನ್ನಲ್ಲ
ಕತ್ತಲನ್ನು ತರುವುದು.
19 ಆಗ ನೀನು ಸಿಂಹದ ಬಾಯಿಂದ ತಪ್ಪಿಸಿಕೊಂಡು
ಕರಡಿಯ ಬಾಯಿಗೆ ಬೀಳುವ ಮನುಷ್ಯನಂತಿ
ರುವಿ. ಆಗ ನೀನು ಆತನ ಮನೆಯ ಆಶ್ರಯಕ್ಕೆ
ಓಡಿಹೋಗಿ ಗೋಡೆಗೆ ಒರಗಿ ನಿಂತಾಗ ಒಂದು
ಹಾವಿನಿಂದ ಕಡಿಸಿಕೊಂಡವನಂತೆ ಇರುವಿ.
20 ಯೆಹೋವನ ನ್ಯಾಯತೀರ್ಪಿನ ದಿವಸವು ಬೆಳಕಿನ
ದಿವಸವಾಗಿರದೆ ಕತ್ತಲೆಯ ದಿವಸವಾಗಿರುವುದು;
ಬೆಳಕಿನ ಮಿಣಕೂ ಇಲ್ಲದ ಅಂಧಕಾರದ ದಿನ
ವಾಗಿರುವುದು.

## ಇಸ್ರೇಲಿನ ಆರಾಧನೆಯು ಯೆಹೋವನಿಗೆ ಬೇಕಿಲ್ಲ

21 ‘‘ನಿಮ್ಮ ಆರಾಧನಾ ದಿವಸಗಳನ್ನು ನಾನು ದ್ವೇಷಿಸು
ತ್ತೇನೆ. ನಾನು ಅವುಗಳನ್ನು ಸ್ವೀಕರಿಸುವುದಿಲ್ಲ.
ನಿಮ್ಮ ಧಾರ್ಮಿಕ ಕೂಟಗಳಲ್ಲಿ ನಾನು ಸಂತೋಷಿ
ಸುವದಿಲ್ಲ.
22 ನೀವು ಸರ್ವಾಂಗ ಹೋಮವನ್ನಾಗಲಿ ಧಾನ್ಯದ
ಹೋಮವನ್ನಾಗಲಿ ಅರ್ಪಿಸಿದರೆ ನಾನು ಅದನ್ನು
ಸ್ವೀಕರಿಸುವುದಿಲ್ಲ. ಸಮಾಧಾನ ಯಜ್ಞದಲ್ಲಿ
ಕೊಬ್ಬಿದ ಪ್ರಾಣಿಗಳನ್ನು ಬಲಿಯರ್ಪಿಸಿದರೂ
ನಾನು ಅದನ್ನು ಕಣ್ಣೆತ್ತಿ ನೋಡುವದಿಲ್ಲ.
23 ನಿಮ್ಮ ಗಟ್ಟಿಯಾದ ಹಾಡುಗಳನ್ನು ನನ್ನಿಂದ ದೂರ
ಮಾಡಿರಿ. ನಿಮ್ಮ ಹಾರ್ಪ್ ವಾದ್ಯಗಳ ಹಾಡು
ಗಳನ್ನು ನಾನು ಕೇಳುವುದಿಲ್ಲ.
24 ನಿಮ್ಮ ದೇಶದಿಂದ ನ್ಯಾಯವು ಹರಿಯುವಂತೆ
ಮಾಡಿರಿ. ಎಂದಿಗೂ ಬತ್ತದ ಒರತೆಯಂತೆ ನಿಮ್ಮ
ಒಳ್ಳೆತನವು ಹರಿಯಲಿ.
25 ಇಸ್ರೇಲೇ, ನೀನು ನಾಲ್ವತ್ತು ವರುಷ ಮರುಭೂಮಿ
ಯಲ್ಲಿ ನನಗೆ ಯಜ್ಞ ಹೋಮಗಳನ್ನು ಸಮರ್ಪಿಸಿ
ದ್ದಿಯೋ? ಇಲ್ಲ.
26 ಅದೇ ಸಮಯದಲ್ಲಿ ನೀನು ನಿನ್ನ ರಾಜನಾದ
ಸಕ್ಕೂತನ ಮತ್ತು ಕೈವಾನನ ವಿಗ್ರಹಗಳನ್ನು ತೆಗೆದು
ಕೊಂಡು ಹೋದೆ. ಆ ನಕ್ಷತ್ರಗಳನ್ನು ದೇವರು
ಗಳನ್ನಾಗಿ ನೀನೇ ಮಾಡಿಕೊಂಡೆ.
27 ಆದುದರಿಂದ ನಿನ್ನನ್ನು ಸೆರೆಹಿಡಿಯಲ್ಪಟ್ಟವನಾಗಿ
ದಮಸ್ಕದ ಆಚೆಗೆ ಕಳುಹಿಸುವೆನು.’’ ಇದು
ಯೆಹೋವನ ನುಡಿ.

## ಇಸ್ರೇಲರ ಸುಭಿಕ್ಷೆ ತೆಗೆಯಲ್ಪಡುವದು

6 ಚೀಯೋನಿನಲ್ಲಿ ಆರಾಮವಾಗಿರುವವರಿಗೂ
ಸಮಾರ್ಯದ ಪರ್ವತಾಗ್ರಗಳಲ್ಲಿ ಸುರಕ್ಷಿತರಾಗಿ
ರುವವರಿಗೂ ಕೇಡುಕು ಸಂಭವಿಸುವದು. ನೀವು
ವಿಶೇಷವಾದ ದೇಶದ ವಿಶೇಷ ನಾಯಕರು.
ಇಸ್ರೇಲಿನ ಮನೆತನವು ಸಲಹೆಗಾಗಿ ನಿಮ್ಮ ಹತ್ತಿರ
ಬರುತ್ತದೆ.
2 ಹೋಗಿ ಕಲ್ನೆಯ ಕಡೆಗೆ ದಿಟ್ಟಿಸು. ಅಲ್ಲಿಂದ ದೊಡ್ಡ
ಪಟ್ಟಣವಾದ ಹಾಮಾತಿಗೆ ಹೋಗು. ಫಿಲಿಷ್ಟಿಯರ
ಗತ್ ಪಟ್ಟಣಕ್ಕೆ ಹೋಗು. ಆ ಜನಾಂಗಗಳಿಗಿಂತ
ನೀವು ಉತ್ತಮರೋ? ಇಲ್ಲ. ಅವರ ರಾಜ್ಯವು
ನಿಮಗಿಂತ ವಿಸ್ತಾರವಾಗಿದೆ.
3 ಶಿಕ್ಷಿಸಲ್ಪಡುವ ದಿವಸದ ಕಡೆಗೆ ನೀವು ಧಾವಿಸುತ್ತಿ
ದ್ದೀರಿ. ಅಕ್ರಮ ಆಳ್ವಿಕೆಯನ್ನು ನೀವು ಹತ್ತಿರಕ್ಕೆ ಬರ
ಮಾಡಿಕೊಳ್ಳುತ್ತಾ ಇದ್ದೀರಿ.
4 ಆದರೆ ಈಗ ನೀವು ಸುಖದ ಜೀವಿತದಲ್ಲಿ ಆನಂದಿ
ಸುತ್ತಿದ್ದೀರಿ. ದಂತದ ಮಂಚದಲ್ಲಿ ಮಲಗುವಿರಿ;
ಸುಖಾಸನಗಳ ಮೇಲೆ ಬಿದ್ದುಕೊಳ್ಳುವಿರಿ. ಹಿಂಡಿ
ನಿಂದ ಎಳೇ ಕುರಿಮರಿಯನ್ನೂ ಹಟ್ಟಿಯಿಂದ ಎಳೇ
ಕರುವನ್ನೂ ಭಕ್ಷಿಸುತ್ತೀರಿ.
5 ನಿಮ್ಮ ತಂತಿ ವಾದ್ಯಗಳಿಂದ ಹಾಡನ್ನು ಬಾರಿಸು
ವಿರಿ; ದಾವೀದನಂತೆ ನಿಮ್ಮ ವಾದ್ಯಗಳನ್ನು
ಅಭ್ಯಾಸಿಸುವಿರಿ.
6 ಅಂದವಾದ ಪಾತ್ರೆಗಳಲ್ಲಿ ದ್ರಾಕ್ಷಾರಸ ಕುಡಿಯು
ವಿರಿ. ಉತ್ತಮವಾದ ಸುಗಂಧ ತೈಲವನ್ನು ಉಪ
ಯೋಗಿಸುವಿರಿ. ಯೋಸೇಫನ ಕುಟುಂಬದ
ನಾಶನದ ಬಗ್ಗೆಯೂ ನೀವು ಬೇಸರಗೊಳ್ಳಲಿಲ್ಲ.

7 ಈಗ ಆ ಜನರು ತಮ್ಮ ಸುಖಾಸನಗಳಲ್ಲಿ ಕಾಲನ್ನು ನೇರ
ವಾಗಿ ಚಾಚಿಕೊಂಡು ಮಲಗಿದ್ದಾರೆ. ಆದರೆ ಅವರ ಸುಖದ
ಸಮಯಗಳು ಅಂತ್ಯವಾಗುವವು. ಅವರು ಕೈದಿಗಳಂತೆ ಸೆರೆ
ಹಿಡಿಯಲ್ಪಟ್ಟು ಪರದೇಶಕ್ಕೆ ಒಯ್ಯಲ್ಪಡುವರು. ಅವರಲ್ಲಿ
ಕೆಲವರು ಸೆರೆಗೊಯ್ಯಲ್ಪಡುವವರಲ್ಲಿ ಮೊದಲಿಗರಾಗು
ವರು. 8 ನನ್ನ ಒಡೆಯನಾದ ಯೆಹೋವನು ತನ್ನ ಹೆಸರಿನ
ಮೇಲೆ ಆಣೆಯಿಟ್ಟು ಈ ಮಾತುಗಳನ್ನು ನುಡಿದಿದ್ದಾನೆ.
ಸರ್ವಶಕ್ತನಾದ ಯೆಹೋವನ ನುಡಿಗಳಿವು:
‘‘ಯಾಕೋಬನು ಹೆಚ್ಚಳ ಪಡುವಂಥವುಗಳನ್ನು
ನಾನು ದ್ವೇಷಿಸುತ್ತೇನೆ. ಅವನ ಬಲವಾದ ಬುರು
ಜುಗಳನ್ನು ದ್ವೇಷಿಸುತ್ತೇನೆ. ಆದುದರಿಂದ ಶತ್ರು
ಗಳು ಬಂದು ಪಟ್ಟಣವನ್ನೂ ಪಟ್ಟಣದಲ್ಲಿರುವದೆ
ಲ್ಲವನ್ನೂ ಸೂರೆಮಾಡುವಂತೆ ಮಾಡುವೆನು.’’

## ಸ್ವಲ್ಪ ಮಂದಿ ಇಸ್ರೇಲರು ಬದುಕಿಕೊಳ್ಳುವರು

9 ಆ ಸಮಯದಲ್ಲಿ ಒಂದು ಮನೆಯಲ್ಲಿ ಹತ್ತು ಮಂದಿ
ಇದ್ದರೂ ಅವರು ಸಾಯುವರು. 10 ಒಬ್ಬ ವ್ಯಕ್ತಿಯು ಸತ್ತಾಗ

ಅವನ ಸಂಬಂಧಿಕರಲ್ಲಿ ಒಬ್ಬನು ಬಂದು ಶವವನ್ನು ಸುಡಲು ತೆಗೆದುಕೊಂಡು ಹೋಗುವನು. ಸಂಬಂಧಿಕನು ಬಂದು ಎಲುಬುಗಳನ್ನು ಕೊಂಡೊಯ್ಯುವನು. ಮನೆಯೊಳಗೆ ಅವಿತುಕೊಂಡಿರುವವರನ್ನು ಕರೆಯುವನು. ''ಇನ್ನು ಸತ್ತ ಹೆಣಗಳು ಒಳಗಿವೆಯೋ?'' ಎಂದು ವಿಚಾರಿಸುವನು.

ಒಳಗಿದ್ದವರು ''ಇಲ್ಲ'' ಎಂದ ಉತ್ತರಿಸುವರು.

ಆಗ ಆ ಸಂಬಂಧಿಕನು ಅವರನ್ನು ತಡೆದು, ''ಯೆಹೋವನ ನಾಮವನ್ನು ನಾವು ಉಚ್ಚರಿಸಬಾರದು'' ಎಂದು ಹೇಳುವನು.

11 ನೋಡು, ಯೆಹೋವನು ಆಜ್ಞೆಯನ್ನು ಕೊಡುವನು. ಆಗ ಭವ್ಯಭವನಗಳು ಒಡೆದು ಚೂರು ಚೂರಾಗಿ ಬೀಳುವವು. ಮತ್ತು ಸಣ್ಣ ಮನೆಗಳು ಚಿಂದಿಚಿಂದಿಯಾಗಿ ಚೂರಾಗುವವು.
12 ಕುದುರೆಗಳು ಬಂಡೆಗಳ ಮೇಲೆ ಓಡುವವೋ? ಇಲ್ಲ! ಬಂಡೆಗಳನ್ನು ಊಳಲು ನಿಮ್ಮ ಹಸುಗಳನ್ನು ಉಪಯೋಗಿಸುವಿರೋ? ಇಲ್ಲ! ಆದರೆ ನೀವು ಎಲ್ಲವನ್ನು ತಿರುವು ಮುರುವು ಮಾಡುತ್ತೀರಿ. ಒಳ್ಳೆತನವನ್ನು ನೀವು ವಿಷವಾಗಿ ಮಾಡಿದ್ದೀರಿ. ನ್ಯಾಯವನ್ನು ಕಹಿಯಾದ ವಿಷವನ್ನಾಗಿ ಮಾಡಿದ್ದೀರಿ.
13 ಲೊ ಡೆಬಾರ್‌ನಲ್ಲಿ* ನೀವು ಸಂತೋಷದಲ್ಲಿದ್ದೀರಿ. ''ಕರ್ನಯಿಮನ್ನು ನಾವು ನಮ್ಮ ಬಲದಿಂದಲೆ ಗೆದ್ದಿದ್ದೇವೆ'' ಎಂದು ನೀವು ಹೇಳುತ್ತೀರಿ.

14''ಆದರೆ ಇಸ್ರೇಲೇ, ನಿನಗೆ ವಿರುದ್ಧವಾಗಿ ಒಂದು ಜನಾಂಗವನ್ನು ಎಬ್ಬಿಸುವೆನು. ಆ ಜನಾಂಗವು ನಿಮ್ಮ ದೇಶದಲ್ಲಿ ಪೂರ್ತಿ ಸಂಕಟವನ್ನುಂಟು ಮಾಡುವದು; ಅದು ಲೆಬೋ ಹಮಾತಿನಿಂದ ಹಿಡಿದು ಅರಾಬಾ ಹಳ್ಳದ ತನಕ ಸಂಕಟವನ್ನುಂಟು ಮಾಡುವದು.'' ಸರ್ವಶಕ್ತನಾದ ಯೆಹೋವನು ಇದನ್ನು ಹೇಳಿದ್ದಾನೆ.

### ಮಿಡಿತೆಯ ವಿಷಯವಾದ ದರ್ಶನ

7 ಯೆಹೋವನು ನನಗೆ ಇದನ್ನು ತೋರಿಸಿದನು:
ಎರಡನೇ ಬೆಳೆಯು ಬೆಳೆಯಲಾರಂಭಿಸಿದ ಕಾಲದಲ್ಲಿ
ಆತನು ಮಿಡಿತೆಗಳನ್ನು ತಯಾರುಮಾಡುತ್ತಿದ್ದನು. ಅರ
ಸನು ಮೊದಲನೇ ಬೆಳೆಯನ್ನು ರಾಶಿಮಾಡಿಸಿಕೊಂಡು
ಹೋದ ನಂತರದ ಬೆಳೆ ಇದು. 2ಮಿಡಿತೆಗಳು ದೇಶದ
ಎಲ್ಲಾ ಹುಲ್ಲನ್ನು ತಿಂದುಬಿಟ್ಟವು. ಆ ಬಳಿಕ ನಾನು ಹೇಳಿ
ದ್ದೇನಂದರೆ, ''ನನ್ನ ಒಡೆಯನಾದ ಯೆಹೋವನೇ,
ನಮ್ಮನ್ನು ಕ್ಷಮಿಸು. ಯಾಕೋಬನು ತೀರಾ ಚಿಕ್ಕವನಾಗಿ
ರುವದರಿಂದ ತನ್ನನ್ನು ತಾನೇ ರಕ್ಷಿಸಿಕೊಳ್ಳಲಾರನು. ಅವನಿ
ಗಾಗಿ ನಾನು ನಿನ್ನನ್ನು ಬೇಡುತ್ತೇನೆ.''
3ಆಗ ಯೆಹೋವನು ತನ್ನ ನಿರ್ಧಾರವನ್ನು ಬದಲಿಸಿ
ಹೀಗಂದನು, ''ಅದು ನೆರವೇರುವುದಿಲ್ಲ.''

### ಬೆಂಕಿಯ ವಿಷಯವಾದ ದರ್ಶನ

4ನನ್ನ ಒಡೆಯನಾದ ಯೆಹೋವನು ಈ ವಿಷಯ
ಗಳನ್ನು ನನಗೆ ತೋರಿಸಿದನು. ದೇವರಾದ ಯೆಹೋವನು
ಬೆಂಕಿಯಿಂದ ನ್ಯಾಯತೀರಿಸುವುದಕ್ಕಾಗಿ ಕರೆಯುವು
ದನ್ನು ಕಂಡೆನು. ಆ ಬೆಂಕಿಯು ಮಹಾ ಸಾಗರವನ್ನು ನಾಶ
ಮಾಡಿತು. ಭೂಮಿಯನ್ನು ತಿಂದು ಬಿಡಲೂ ಪ್ರಾರಂಭಿ
ಸಿತು. 5ಆಗ ನಾನು, ''ದೇವರಾದ ಯೆಹೋವನೇ, ಸಾಕು,
ನಿಲ್ಲಿಸು ಎಂದು ಬೇಡುತ್ತೇನೆ. ಯಾಕೋಬನು ಇದರಿಂದ
ಉಳಿಯಲಿಕ್ಕಿಲ್ಲ, ಅವನು ಇನ್ನೂ ಚಿಕ್ಕವನು'' ಅಂದೆನು.
6ಆಗ ದೇವರಾದ ಯೆಹೋವನು ತನ್ನ ಮನಸ್ಸನ್ನು ಬದ
ಲಾಯಿಸಿ, ''ಇದು ಕೂಡಾ ನೆರವೇರದು'' ಎಂದು
ಹೇಳಿದನು.

### ತೂಗು ಗುಂಡಿನ ದರ್ಶನ

7ಯೆಹೋವನು ಈ ದರ್ಶನವನ್ನು ನನಗೆ ದಯಪಾಲಿಸಿ
ದನು. ಕೈಯಲ್ಲಿ ತೂಗು ಗುಂಡನ್ನು ಹಿಡಿದುಕೊಂಡು
ಗೋಡೆಯ ಬದಿಯಲ್ಲಿ ನಿಂತಿದ್ದನು. ಆ ಗೋಡೆಯು
ನೂಲಿನಿಂದ ಗುರುತು ಮಾಡಲ್ಪಟ್ಟಿತ್ತು. 8ಆಗ ಯೆಹೋ
ವನು ನನಗೆ, ''ಆಮೋಸನೇ, ಏನನ್ನು ನೋಡುತ್ತೀ?''
ಅದಕ್ಕೆ ನಾನು, ''ನೂಲು ಗುಂಡು'' ಅಂದೆನು.
ಆಗ ನನ್ನ ಒಡೆಯನು, ''ನೋಡು, ನನ್ನ ಜನರಾದ
ಇಸ್ರೇಲರ ಮೇಲೆ ನೂಲುಗುಂಡನ್ನು ಹಾಕುವೆನು. ಅವ
ರನ್ನು ನಾನು ಸುಮ್ಮನೆ ಬಿಟ್ಟುಬಿಡುವುದಿಲ್ಲ. ಅವರ
ಪಾಪದ ಸ್ಥಳಗಳನ್ನು ನಾನು ತೆಗೆದುಬಿಡುವೆನು. 9ಇಸಾಕನ
ವೇದಿಕೆಗಳೆಲ್ಲಾ ನಾಶವಾಗುವದು. ಇಸ್ರೇಲಿನ ಪವಿತ್ರ ಸ್ಥಳ
ಗಳೆಲ್ಲಾ ಬಂಡೆಯ ರಾಶಿಯಾಗಿ ಮಾರ್ಪಡುವವು.
ಯಾರೊಬ್ಬಾಮನ ಕುಟುಂಬದ ಮೇಲೆ ಆಕ್ರಮಣ
ಮಾಡಿ ಅವರನ್ನು ಸಂಹರಿಸುವೆನು.''

### ಆಮೋಸನನ್ನು ಪ್ರವಾದಿಸದಂತೆ ಅಮಚ್ಯನು ಪ್ರಯತ್ನಿಸಿದ್ದು

10ಬೇತೇಲಿನ ಯಾಜಕನಾದ ಅಮಚ್ಯನು ಇಸ್ರೇಲಿನ
ಅರಸನಾದ ಯಾರೊಬ್ಬಾಮನಿಗೆ ಈ ಪತ್ರವನ್ನು ಕಳುಹಿ
ಸಿದನು. ''ನಿನಗೆ ವಿರುದ್ಧವಾಗಿ ಆಮೋಸನು ಯೋಜನೆ
ಗಳನ್ನು ಮಾಡುತ್ತಿದ್ದಾನೆ. ಇಸ್ರೇಲಿನ ಜನರು ನಿನಗೆ
ವಿರುದ್ಧವಾಗಿ ಯುದ್ಧಮಾಡುವಂತೆ ಪ್ರಯತ್ನಿಸುತ್ತಾನೆ.
ಅವನು ಎಷ್ಟೆಲ್ಲಾ ಮಾತಾಡುತ್ತಾನೆಂದರೆ, ಈ ದೇಶವು

**ಲೊ ಡೆಬಾರ್** ಇದರರ್ಥ ''ಶೂನ್ಯ.''

ಅವನ ಮಾತುಗಳನ್ನು ತುಂಬಲು ಸಾಧ್ಯವಿಲ್ಲ.
11 ಆಮೋಸನು ಯಾರೊಬ್ಬಾಮನು ಕತ್ತಿಯಿಂದ ಸಂಹರಿ
ಸಲ್ಪಡುವನು ಮತ್ತು ಇಸ್ರೇಲಿನ ಜನರು ಸೆರೆಹಿಡಿಯಲ್ಪ
ಟ್ಟವರಾಗಿ ಪರದೇಶಕ್ಕೆ ಒಯ್ಯಲ್ಪಡುವರು'' ಎಂದು
ಹೇಳಿದ್ದಾನೆ.

12 ಅಮಚ್ಯನು ಆಮೋಸನಿಗೆ ಹೇಳಿದ್ದೇನಂದರೆ,
''ಭವಿಷ್ಯವಾದಿಯೇ, ನೀನು ಯೆಹೂದಕ್ಕೆ ಹೋಗಿ ನಿನ್ನ
ಹೊಟ್ಟೆ ಹೊರಕೋ. ನಿನ್ನ ಪ್ರಸಂಗವನ್ನು ಅಲ್ಲಿಯೇ
ಮಾಡು. 13 ಬೇತೇಲಿನಲ್ಲಿ ಇನ್ನು ನೀನು ಪ್ರವಾದಿಸುವದು
ಬೇಡ. ಇದು ಯಾರೊಬ್ಬಾಮನ ಪವಿತ್ರ ಸ್ಥಳ. ಇದು
ಇಸ್ರೇಲಿನ ದೇವಾಲಯ'' ಎಂದು ಹೇಳಿದನು.

14 ಅದಕ್ಕೆ ಆಮೋಸನು ಅಮಚ್ಯನಿಗೆ, ''ಪ್ರವಾದಿಸು
ವದು ನನ್ನ ಕಸುಬಲ್ಲ. ಅಲ್ಲದೆ ನಾನು ಪ್ರವಾದಿಗಳ
ಕುಟುಂಬಕ್ಕೂ ಸೇರಿದವನಲ್ಲ. ನಾನು ದನ ಮೇಯಿಸು
ವವನೂ, ಅತ್ತಿ ಮರಗಳನ್ನು ಹತ್ತಿ ಹಣ್ಣು ಕೀಳುವವನೂ
ಆಗಿದ್ದೇನೆ. 15 ನಾನು ಕುರಿಕಾಯುತ್ತಿರುವಾಗ ಯೆಹೋ
ವನು ನನ್ನನ್ನು ಕುರಿಗಳ ಹಿಂದೆ ಹೋಗಬೇಡ ಎಂದು
ಕರೆದನು. ಆತನು ನನಗೆ, 'ನನ್ನ ಜನರಾದ ಇಸ್ರೇಲರ
ಬಳಿಗೆ ಹೋಗಿ ಪ್ರವಾದಿಸು' ಎಂದು ಹೇಳಿದನು.
16 ಆದುದರಿಂದ ಯೆಹೋವನ ಸಂದೇಶಕ್ಕೆ ಕಿವಿಗೊಡು.
ಆದರೆ ನೀನು ಇಸ್ರೇಲರಿಗೆ ವಿರುದ್ಧವಾಗಿ ಪ್ರವಾದಿಸ
ಬೇಡ. ಇಸಾಕನ ಕುಟುಂಬದ ವಿರುದ್ಧ ಪ್ರಸಂಗಿಸಬೇಡ
ಎಂದು ಹೇಳುತ್ತೀ. 17 ಆದರೆ ದೇವರಾದ ಯೆಹೋವನು
ಹೇಳುವದೇನೆಂದರೆ, 'ನಿನ್ನ ಹೆಂಡತಿಯು ಪಟ್ಟಣದೊಳಗೆ
ವೇಶ್ಯೆಯಾಗುವಳು. ನಿನ್ನ ಗಂಡು, ಹೆಣ್ಣು ಮಕ್ಕಳು ಕತ್ತಿ
ಯಿಂದ ಸಾಯುವರು. ಅನ್ಯರು ನಿನ್ನ ದೇಶವನ್ನು ಕಿತ್ತು
ಕೊಂಡು ತಮ್ಮೊಳಗೆ ಹಂಚಿಕೊಳ್ಳುವರು. ಮತ್ತು ನೀನು
ಪರದೇಶದಲ್ಲಿ ಸಾಯುವಿ. ಇಸ್ರೇಲಿನ ಜನರು ಖಂಡಿತ
ವಾಗಿಯೂ ಸೆರೆಹಿಡಿಯಲ್ಪಟ್ಟು ತಮ್ಮ ದೇಶದಿಂದ
ಒಯ್ಯಲ್ಪಡುವರು.'''

## ಮಾಗಿದ ಹಣ್ಣಿನ ದರ್ಶನ

8 ಯೆಹೋವನು ನನಗೆ ಇದನ್ನು ತೋರಿಸಿದನು.
ಒಂದು ಪುಟ್ಟಿ ಬೇಸಿಗೆಯ ಹಣ್ಣುಗಳನ್ನು ಕಂಡೆನು.
2 ಯೆಹೋವನು ನನಗೆ ಹೀಗೆ ಹೇಳಿದನು,
''ಆಮೋಸನೇ, ನೀನು ಏನನ್ನು ನೋಡುತ್ತೀ?''

ಅದಕ್ಕೆ ನಾನು, ''ಒಂದು ಪುಟ್ಟಿ ಬೇಸಿಗೆಯ
ಹಣ್ಣುಗಳು.''

ಆಗ ಯೆಹೋವನು ನನಗೆ, ''ನನ್ನ ಜನರಾದ ಇಸ್ರೇಲ
ರಿಗೆ ಅಂತ್ಯಕಾಲವು ಬಂದಿದೆ. ಇನ್ನು ಮೇಲೆ ನಾನು ಅವ
ರನ್ನು ಸುಮ್ಮನೆ ಬಿಡುವುದಿಲ್ಲ. 3 ನನ್ನ ಆಲಯದಲ್ಲಿ
ಹಾಡುವ ಹಾಡುಗಳು ಮರಣದ ಶೋಕಗೀತೆಗಳಾಗು
ವವು. ಇವು ಕರ್ತನಾದ ಒಡೆಯನಾದ ಯೆಹೋವನ ನುಡಿ
ಗಳು. ಸತ್ತ ಹೆಣಗಳು ಎಲ್ಲೆಲ್ಲಿಯೂ ಬಿದ್ದುಕೊಂಡಿರು
ವದು. ಜನರು ಮೌನದಿಂದಿದ್ದು ಸತ್ತವರನ್ನು ಎತ್ತಿ ರಾಶಿಗೆ
ಬಿಸಾಡುವರು.''

## ಇಸ್ರೇಲಿನ ವರ್ತಕರಿಗೆ ಹಣ ಸಂಪಾದಿಸುವದೇ ಗುರಿ

4 ನನ್ನ ಮಾತುಗಳನ್ನು ಕೇಳಿರಿ! ಜನರೇ, ನೀವು
ಬಡವರ ಮೇಲೆ ನಡೆದಾಡುತ್ತೀರಿ. ಈ ದೇಶದ
ಬಡಜನರನ್ನು ನಾಶಮಾಡುತ್ತೀರಿ.
5 ವರ್ತಕರಾದ ನೀವು ಹೇಳುವದೇನೆಂದರೆ,
''ಅಮವಾಸ್ಯೆ ಯಾವಾಗ ಮುಗಿಯುವುದು? ಆಗ
ನಾವು ಧಾನ್ಯವನ್ನು ಮಾರಾಟ ಮಾಡುವೆವು.
ಸಬ್ಬತ್ ಯಾವಾಗ ಮುಗಿಯುವುದು? ಆಗ ನಾವು
ನಮ್ಮ ಗೋಧಿಯನ್ನು ಮಾರಾಟಮಾಡಲು ತರು
ವೆವು. ಅದರ ಬೆಲೆಯನ್ನು ಅಧಿಕಗೊಳಿಸಿ ಅಳತೆ
ಯನ್ನು ಕಮ್ಮಿ ಮಾಡುವೆವು. ತ್ರಾಸನ್ನು ಕಡಿಮೆ
ಮಾಡಿ ಜನರಿಗೆ ಮೋಸ ಮಾಡುವೆವು.
6 ಬಡಜನರಿಗೆ ಸಾಲ ಸಂದಾಯ ಮಾಡಲು ಸಾಧ್ಯ
ವಾಗದಿರುವದರಿಂದ ಅವರನ್ನು ನಾವು ಗುಲಾಮರ
ನ್ನಾಗಿ ತೆಗೆದುಕೊಳ್ಳೋಣ. ಒಂದು ಜೊತೆ ಚಪ್ಪ
ಲಿಯ ಕ್ರಯಕೊಟ್ಟು ಅವರನ್ನು ಖರೀದಿಸೋಣ.
ಮತ್ತು ನೆಲದಲ್ಲಿ ಬಿದ್ದ ಗೋಧಿಯನ್ನು ಒಟ್ಟು
ಸೇರಿಸಿ ಮಾರೋಣ.''

7 ಯೆಹೋವನು ''ಯಾಕೋಬನ ಮಹಿಮೆ'' ಎಂಬ
ತನ್ನ ಹೆಸರಿನ ಮೇಲೆ ಆಣೆಯಿಟ್ಟುವಾಗ್ದಾನ ಮಾಡಿದ್ದಾನೆ.

''ಆ ಜನರು ಮಾಡಿದ ಕೃತ್ಯಗಳನ್ನು ನಾನು ಎಂದಿಗೂ
ಮರೆಯುವುದಿಲ್ಲ.
8 ಅದರ ಸಲುವಾಗಿ ಇಡೀ ದೇಶವು ಅಲುಗಾಡು
ವದು. ಸತ್ತವರಿಗಾಗಿ ದೇಶದ ಪ್ರತಿ ನಿವಾಸಿಯು
ರೋಧಿಸುವನು. ಈಜಿಪ್ಟಿನ ನೈಲ್ ನದಿಯ ರೀತಿ
ಯಲ್ಲಿ ದೇಶವು ತಿರುಗು ಮುರುಗಾಗುವುದು.''
9 ಯೆಹೋವನು ಹೀಗನ್ನುತ್ತಾನೆ, ''ಆ ದಿವಸಗಳಲ್ಲಿ
ನಡುಮಧ್ಯಾಹ್ನದಲ್ಲಿಯೇ ಸೂರ್ಯನನ್ನು
ಮುಳುಗುವಂತೆ ಮಾಡುವೆನು. ಶುಭ್ರವಾದ ಹಗಲಿ
ನಲ್ಲಿ ಕತ್ತಲು ಉಂಟಾಗುವಂತೆ ಮಾಡುವೆನು.
10 ನಿಮ್ಮ ಸಂತಸದ ದಿವಸಗಳನ್ನು ಸತ್ತವರಿಗಾಗಿ
ರೋಧಿಸುವ ದಿವಸಗಳನ್ನಾಗಿ ಮಾಡುವೆನು. ನಿಮ್ಮ
ಹಾಡುಗಳೆಲ್ಲಾ ಶೋಕ ಗೀತೆಯಾಗುವವು.
ಎಲ್ಲರೂ ಶೋಕ ಬಟ್ಟೆಯನ್ನು ಧರಿಸುವಂತೆ
ಮಾಡುವೆನು. ಪ್ರತಿ ತಲೆಯನ್ನು ಬೋಳು

ತಲೆಯನ್ನಾಗಿ ಮಾಡುವೆನು. ಒಬ್ಬನೇ ಮಗನನ್ನು
ಕಳೆದುಕೊಳ್ಳುವಾಗ ರೋಧಿಸುವ ಹಾಗೆ ಗಟ್ಟಿ
ಯಾಗಿ ರೋಧಿಸುವಂತೆ ಮಾಡುತ್ತೇನೆ. ಅದರ
ಅಂತ್ಯ ಕಹಿಯಾಗಿರುವುದು.''

## ದೇವರ ವಾಕ್ಯಕ್ಕಾಗಿ ಅತಿಯಾದ ಹಸಿವೆಯಿಂದ ಕೇಳುವ ದಿವಸಗಳು ಬರುವವು

11 ಯೆಹೋವನು ಹೇಳುವುದೇನೆಂದರೆ,
''ನಿಮ್ಮ ದೇಶದಲ್ಲಿ ಹಸಿವೆಯ ದಿವಸಗಳನ್ನು ಬರ
ಮಾಡುವೆನು. ಜನರು ರೊಟ್ಟಿಗಾಗಿ ಹಸಿಯುವು
ದಿಲ್ಲ. ನೀರಿಗಾಗಿ ಬಾಯಾರುವದಿಲ್ಲ. ಇಲ್ಲ.
ಜನರು ಯೆಹೋವನ ವಾಕ್ಯಕ್ಕಾಗಿ ಹಸಿವೆ ಉಳ್ಳವ
ರಾಗುವರು.
12 ಮೃತ್ಯು ಸಮುದ್ರದಿಂದ ಹಿಡಿದು ಮೆಡಿಟರೇನಿ
ಯನ್ ಸಮುದ್ರದ ತನಕ ಜನರು ಅಡ್ಡಾಡುವರು.
ಉತ್ತರದಿಂದ ಪೂರ್ವದಿಕ್ಕಿನ ತನಕ ಜನರು ಹಿಂದೆ
ಮುಂದೆ ಹೋಗುತ್ತಾ ಹುಡುಕುವರು. ಯೆಹೋ
ವನ ಸಂದೇಶಕ್ಕಾಗಿ ಹಾತೊರೆಯುವರು. ಆದರೆ
ಅವರು ಕಂಡುಕೊಳ್ಳುವುದಿಲ್ಲ.
13 ಆ ಸಮಯದಲ್ಲಿ ಸುಂದರವಾದ ತರುಣ ತರುಣಿ
ಯರು ದಾಹದಿಂದ ಬಳಲುವರು. ಆ ಜನರು
ಸಮಾರ್ಯದ ಪಾಪದ* ಮೇಲೆ ಆಣೆಯಿಡು
ವರು. 'ದಾನೇ, ನಿನ್ನ ದೇವರಾಣೆ, 'ಬೇರ್ಷೆಬದ
ದೇವರಾಣೆ ಎಂಬುದಾಗಿ ಹೇಳುವರು' ಆದರೆ ಆ
ಜನರು ಬಿದ್ದು ಹೋಗುವರು. ಅಲ್ಲಿಂದ ತಿರುಗಿ
ಏಳುವದೇ ಇಲ್ಲ.''

## ವೇದಿಕೆಯ ಬದಿಯಲ್ಲಿ ನಿಂತ ಯೆಹೋವನ ದರ್ಶನ

9 ಯಜ್ಞವೇದಿಕೆಯ ಬಳಿಯಲ್ಲಿ ನನ್ನ ಒಡೆಯನು ನಿಂತಿ
ರುವುದನ್ನು ಕಂಡೆನು. ಆತನು ಹೇಳಿದ್ದೇನೆಂದರೆ,

''ಸ್ತಂಭಗಳ ಮೇಲೆ ಹೊಡೆಯಿರಿ, ಆಗ ಕಟ್ಟಡವು
ಹೊಸ್ತಿಲಿನ ತನಕ ಕಂಪಿಸುವದು. ಸ್ತಂಭಗಳು ಜನರ
ತಲೆಗಳ ಮೇಲೆ ಕುಸಿದುಬೀಳುವಂತೆ ಮಾಡಿರಿ.
ಅದರಿಂದ ಸಾಯದೆ ಉಳಿಯುವವರನ್ನು ನಾನು
ಖಡ್ಗದಿಂದ ಸಾಯಿಸುವೆನು. ಅದರಿಂದ ತಪ್ಪಿಸಿ
ಕೊಂಡು ಓಡಿಹೋಗಲು ಒಬ್ಬನು ಪ್ರಯತ್ನಿಸಿ
ದರೂ ಸಾಧ್ಯವಾಗುವುದಿಲ್ಲ. ಒಬ್ಬನಾದರೂ ತಪ್ಪಿಸಿ
ಕೊಳ್ಳುವುದಿಲ್ಲ.
2 ಭೂಮಿಯನ್ನು ಅವರು ಅಗೆದು ಅದರೊಳಗೆ
ಅವಿತುಕೊಂಡರೆ ಅದರೊಳಗಿಂದ ಅವರನ್ನು
ಎಳೆದು ಹಾಕುವೆನು. ಆಕಾಶದೊಳಗೆ ಹಾರಿ ತಪ್ಪಿಸಿ
ಕೊಂಡರೆ ಅಲ್ಲಿಂದಲೂ ನಾನು ಅವರನ್ನು ಎಳೆದು
ಹಾಕುವೆನು.
3 ಕರ್ಮೆಲ್ ಬೆಟ್ಟದ ತುದಿಯಲ್ಲಿ ಅವರು ಅಡಗಿ
ಕೊಂಡರೆ ಅವರನ್ನು ಕಂಡುಹಿಡಿದು ಅಲ್ಲಿಂದ
ತೆಗೆದು ಬಿಡುವೆನು. ಸಮುದ್ರತಳದಲ್ಲಿ ಅವರು
ಅಡಗಿಕೊಂಡರೆ ಅವರನ್ನು ಕಚ್ಚುವಂತೆ ನಾನು
ಸರ್ಪಕ್ಕೆ ಆಜ್ಞಾಪಿಸುವೆನು.
4 ಶತ್ರುಗಳು ಅವರನ್ನು ಸೆರೆಹಿಡಿದರೆ ನಾನು ಅವ
ರನ್ನು ಕೊಂದು ಹಾಕಲು ಕತ್ತಿಗೆ ಆಜ್ಞಾಪಿಸುವೆನು.
ಹೌದು ನಾನು ಅವರನ್ನು ಗಮನಿಸುತ್ತಾ ಕಾಯು
ವೆನು. ಅವರಿಗೆ ಒಳ್ಳೆದು ಮಾಡುವುದಕ್ಕಾಗಿ ಅಲ್ಲ
ಅವರಿಗೆ ಸಂಕಟ ಕೊಡುವದಕ್ಕಾಗಿ ಅವರನ್ನು
ಕಾಯುತ್ತೇನೆ.''

## ಶಿಕ್ಷೆಯು ಜನರನ್ನು ನಾಶಮಾಡುವದು

5 ನನ್ನ ಒಡೆಯನಾದ ಸರ್ವಶಕ್ತನಾದ ಯೆಹೋವನು
ಭೂಮಿಯನ್ನು ಸ್ಪರ್ಶಿಸುವನು. ಆಗ ಅದು ಕರಗಿ
ಹೋಗುವುದು. ದೇಶದಲ್ಲಿ ವಾಸಿಸುವ ಜನರೆಲ್ಲಾ
ಸತ್ತು ಹೋದವರಿಗಾಗಿ ಗೋಳಾಡುವರು. ಈಜಿ
ಪ್ಟಿನ ನೈಲ್ ನದಿಯಂತೆ ದೇಶದಲ್ಲಿ ಏರಿಳಿತ
ಉಂಟಾಗುವುದು.
6 ಯೆಹೋವನು ಆಕಾಶದ ಮೇಲೆ ತನಗಾಗಿ
ಮೇಲುಪ್ಪರಿಗೆಗಳನ್ನು ಕಟ್ಟಿದನು. ಭೂಮಿಯ
ಮೇಲೆ ಆಕಾಶವನ್ನು ಹರಡುವನು. ಸಮುದ್ರದ
ನೀರನ್ನು ಕರೆದು ಭೂಮಿಯ ಮೇಲೆ ಮಳೆಗರೆ
ಯುವಂತೆ ಮಾಡುವನು. ಆತನ ಹೆಸರು
ಯೆಹೋವ.

## ಇಸ್ರೇಲಿನ ನಾಶನದ ವಾಗ್ದಾನ

7 ಯೆಹೋವನು ಇಂತೆನ್ನುತ್ತಾನೆ:
''ಇಸ್ರೇಲೇ, ನೀನು ನನಗೆ ಐತಿಯೋಪ್ಯದವರಂತಿ
ರುವೆ. ಇಸ್ರೇಲನ್ನು ಈಜಿಪ್ಟ್ ದೇಶದಿಂದ ನಾನು
ಹೊರತಂದೆನು. ಕಫ್ತೋರಿನಿಂದ ಫಿಲಿಷ್ಟಿಯರನ್ನು
ಹೊರತಂದೆನು ಮತ್ತು ಕಿರ್‌ನಿಂದ ಅರಾಮ್ಯರನ್ನು
ತಂದೆನು.''
8 ಪಾಪದಿಂದ ತುಂಬಿದ ಇಸ್ರೇಲ್ ದೇಶವನ್ನು
ಯೆಹೋವನು ನೋಡುತ್ತಿದ್ದಾನೆ. ಆತನು ಹೇಳಿ
ದ್ದೇನೆಂದರೆ, ''ನಾನು ಇಸ್ರೇಲರನ್ನು ಈ
ಭೂಮುಖದಿಂದ ಅಳಿಸಿ ಬಿಡುವೆನು. ಆದರೆ
ಯಾಕೋಬನ ಸಂತತಿಯವರನ್ನು ಸಂಪೂರ್ಣ
ವಾಗಿ ನಾಶ ಮಾಡುವುದಿಲ್ಲ.

---

**ಸಮಾರ್ಯದ ಪಾಪ** ಅಂದರೆ ಬಸವನ ವಿಗ್ರಹ.

9 ಇಸ್ರೇಲನ್ನು ನಾಶನ ಮಾಡುವದಕ್ಕಾಗಿ ಆಜ್ಞಾಪಿಸು
ವೆನು. ಪರದೇಶಗಳಲ್ಲಿ, ಇಸ್ರೇಲರನ್ನು ನಾನು ಚದ
ರಿಸಿ ಬಿಡುವೆನು. ಒಬ್ಬನು ಜಾಳಿಗೆಯಲ್ಲಿ ಹಿಟ್ಟನ್ನು
ಜಾಳಿಸುವಂತೆ ಇರುವುದು. ಒಳ್ಳೆಯ ಹಿಟ್ಟು ಜಾಳಿ
ಗೆಯ ರಂಧ್ರದ ಮೂಲಕ ಕೆಳಗೆ ಬಿದ್ದರೆ, ಹಿಟ್ಟಿನ
ಗಂಟುಗಳು ಜಾಳಿಗೆಯ ಮೇಲೆ ಸಿಕ್ಕಿಕೊಳ್ಳುವವು.
ಯಾಕೋಬನ ಕುಟುಂಬಕ್ಕೆ ಇದೇ ರೀತಿ
ಯಾಗುವುದು.
10 ನನ್ನ ಜನರಲ್ಲಿ ಪಾಪಿಗಳು ಹೇಳುತ್ತಾರೆ: 'ನಮಗೆ
ಯಾವ ಕೇಡೂ ಸಂಭವಿಸುವುದಿಲ್ಲ.' ಆದರೆ
ಅವರೆಲ್ಲಾ ಕತ್ತಿಯಿಂದ ಸಾಯುವರು.''

### ರಾಜ್ಯವು ತಿರುಗಿ ಸ್ಥಾಪಿಸಲ್ಪಡುವದೆಂದು ದೇವರ ವಾಗ್ದಾನ

11 ''ದಾವೀದನ ಗುಡಾರವು ಕುಸಿದುಬಿದ್ದದೆ. ಆದರೆ ಆ
ದಿವಸಗಳಲ್ಲಿ ತಿರುಗಿ ಅದನ್ನು ಮೇಲಕ್ಕೆತ್ತುವೆನು.
ಗೋಡೆಯಲ್ಲಿರುವ ರಂಧ್ರಗಳನ್ನು ನಾನು ಸರಿಪಡಿ
ಸುವೆನು. ಬಿದ್ದು ಹೋದ ಕಟ್ಟಡಗಳನ್ನು ತಿರುಗಿ
ಕಟ್ಟುವೆನು. ಮುಂಚೆ ಹೇಗಿತ್ತೋ ಹಾಗೆಯೇ
ಇರುವದು.
12 ಆಗ ಎದೋಮಿನಲ್ಲಿ ಉಳಿದವರು, ಮತ್ತು ನನ್ನ
ಹೆಸರಿನಿಂದ ಕರೆಯಲ್ಪಟ್ಟ ಜನರು ಸಹಾಯಕ್ಕಾಗಿ
ಯೆಹೋವನನ್ನು ನೋಡುವರು.'' ಇದು
ಯೆಹೋವನ ನುಡಿ. ಆತನು ಅವುಗಳನ್ನು ನೆರ
ವೇರಿಸುವನು.
13 ಯೆಹೋವನು ಹೇಳುವುದೇನೆಂದರೆ, ''ಒಂದು
ಸಮಯವು ಬರುವುದು ಆಗ ಉಳುವವನು
ಕೊಯ್ಯುವವನನ್ನೇ ಮೀರಿಸಿ ಮುಂದೆ ಹೋಗು
ವನು. ದ್ರಾಕ್ಷಿನೆಡುವವನು ದ್ರಾಕ್ಷಿಯನ್ನು
ಕೊಯ್ಯುವವನನ್ನೇ ಮೀರಿಸಿ ಮುಂದೆ ಹೋಗು
ವನು. ಬೆಟ್ಟಗಳಿಂದಲೂ ಪರ್ವತಗಳಿಂದಲೂ ಸಿಹಿ
ದ್ರಾಕ್ಷಾರಸವು ಹರಿದು ಬರುವುದು.
14 ಸೆರೆಯಿಂದ ಬಿಡಿಸಿ ನನ್ನ ಜನರಾದ ಇಸ್ರೇಲನ್ನು
ಹಿಂದಕ್ಕೆ ಕರೆತರುವೆನು. ಪಾಳುಬಿದ್ದ ಪಟ್ಟಣ
ಗಳನ್ನು ತಿರುಗಿ ಕಟ್ಟಿ ಅದರಲ್ಲಿ ವಾಸಿಸುವರು.
ದ್ರಾಕ್ಷಿತೋಟವನ್ನು ಮಾಡಿ ಅದರಿಂದ ಸಿಗುವ
ದ್ರಾಕ್ಷಾರಸವನ್ನು ಕುಡಿಯುವರು. ತೋಟಗಳನ್ನು
ಮಾಡಿ ಅದರ ಫಲಗಳನ್ನು ಭೋಗಿಸುವರು.
15 ನಾನು ನನ್ನ ಜನರನ್ನು ಅವರ ದೇಶದಲ್ಲಿ
ಸ್ಥಾಪಿಸುವೆನು. ನಾನು ಕೊಟ್ಟಿರುವ ದೇಶದಿಂದ
ಅವರು ಕೀಳಲ್ಪಡುವುದಿಲ್ಲ.'' ನಿಮ್ಮ ದೇವರಾದ
ಯೆಹೋವನು ಈ ಸಂಗತಿಗಳನ್ನು ಹೇಳಿದ್ದಾನೆ.

# ಒಬದ್ಯ

### ಎದೋಮ್ ಶಿಕ್ಷಿಸಲ್ಪಡುವದು

ಒಬದ್ಯನಿಗೆ ಆದ ದೈವದರ್ಶನ. ನನ್ನ ಒಡೆಯನಾದ ಯೆಹೋವನು ಎದೋಮಿನ ಬಗ್ಗೆ ಹೀಗೆ ಹೇಳುತ್ತಾನೆ:

ದೇವರಾದ ಯೆಹೋವನಿಂದ ನಾವು ಒಂದು ಸುದ್ಧಿ
ಕೇಳಿದೆವು. ಒಬ್ಬ ಸಂದೇಶ ದೂತನು ಜನಾಂಗಗಳ
ಕಡೆಗೆ ಕಳುಹಿಸಲ್ಪಟ್ಟನು. ಅವನು ಹೇಳಿದ್ದೇ
ನೆಂದರೆ, ‘‘ಬನ್ನಿ, ನಾವು ಎದೋಮಿಗೆ ವಿರುದ್ಧ
ವಾಗಿ ಯುದ್ಧಮಾಡೋಣ.’’

### ಯೆಹೋವನು ಎದೋಮಿನೊಂದಿಗೆ ಮಾತನಾಡುತ್ತಾನೆ

2 ‘‘ಎದೋಮೇ, ನಿನ್ನನ್ನು ನಾನು ಅತ್ಯಂತ ಚಿಕ್ಕದಾದ
ಜನಾಂಗವನ್ನಾಗಿ ಮಾಡುವೆನು. ಎಲ್ಲರೂ ನಿನ್ನನ್ನು
ಹೆಚ್ಚಾಗಿ ಹಗೆ ಮಾಡುವರು.
3 ನಿನ್ನ ಹೆಚ್ಚಳಿಕೆಯು ನಿನ್ನನ್ನು ಮರುಳುಗೊಳಿಸಿತು.
ನೀನು ಎತ್ತರವಾದ ಬೆಟ್ಟದಂಚಿನ ಗುಹೆಗಳಲ್ಲಿ
ವಾಸಿಸುವೆ. ನಿನ್ನ ಮನೆಯು ಪರ್ವತಗಳಲ್ಲಿದೆ.
ಆದುದರಿಂದ ನೀನು ನಿನ್ನಲ್ಲಿ ಹೇಳಿಕೊಳ್ಳುವದೇ
ನಂದರೆ, ‘ಯಾರೂ ನನ್ನನ್ನು ಕೆಳಗೆ ಭೂಮಿಯ
ಮೇಲೆ ಇಳಿಸಲಾರರು.’’’

### ಎದೋಮನು ಅದೋಗತಿಗೆ ಸೇರುವನು

4 ದೇವರಾದ ಯೆಹೋವನು ಹೀಗೆ ಹೇಳುತ್ತಾನೆ:
‘‘ನೀನು ಹದ್ದಿನಂತೆ ಉನ್ನತದಲ್ಲಿ ಹಾರಾಡಿದರೂ,
ನಕ್ಷತ್ರಗಳಲ್ಲಿ ಗೂಡ ಕಟ್ಟಿದರೂ ಸಹ ಅಲ್ಲಿಂದಲೂ
ನಾನು ನಿನ್ನನ್ನು ಕೆಳಕ್ಕೆ ತರುವೆನು.’’
5 ನೀನು ಸಂಪೂರ್ಣವಾಗಿ ನಾಶವಾಗುವೆ. ಕಳ್ಳರು
ನಿನ್ನ ಬಳಿಗೆ ಬರುವರು, ದರೋಡೆಗಾರರು ರಾತ್ರಿ
ವೇಳೆ ಬರುವರು. ಅವರು ತಮಗೆ ಇಷ್ಟಬಂದದ್ದ
ನ್ನೆಲ್ಲಾ ದೋಚುವರು. ನಿನ್ನ ತೋಟದಲ್ಲಿ ಕೆಲಸ
ಗಾರರು ದ್ರಾಕ್ಷೆಯನ್ನು ಕೊಯ್ಯುವಾಗ ಕೆಲ
ವೊಂದನ್ನು ಬಿಟ್ಟು ಬಿಡುವರು.
6 ಆದರೆ ವೈರಿಯು ಏಸಾವಿನ ಗುಪ್ತನಿಧಿಗಾಗಿ
ಹುಡುಕುವರು; ಅವರು ಎಲ್ಲವನ್ನು ಕಂಡು
ಹಿಡಿಯುವರು.
7 ನಿನ್ನ ಸ್ನೇಹಿತರಂತಿದ್ದ ಜನರೆಲ್ಲರೂ ಸೇರಿ ನಿನ್ನನ್ನು
ನಿನ್ನ ದೇಶದಿಂದ ಹೊರಗಟ್ಟುವರು. ನಿನ್ನೊಡನೆ
ಸಮಾಧಾನದಲ್ಲಿದ್ದ ಜನರು ನಿನ್ನನ್ನು ಮೋಸಪಡಿಸಿ
ಸೋಲಿಸುವರು. ನಿನ್ನೊಂದಿಗೆ ಯುದ್ಧದಲ್ಲಿ
ಹೋರಾಡಿದವನು ನಿನ್ನನ್ನು ಉರುಲಿನಲ್ಲಿ ಸಿಕ್ಕಿಸು
ವನು. ‘ಆದರೆ ಅದು ನಿನಗೆ ತಿಳಿಯುವುದೇ ಇಲ್ಲ’
ಎಂದು ಅನ್ನುವರು.
8 ಯೆಹೋವನು ಹೇಳುವುದೇನಂದರೆ, ‘‘ಆ ದಿವಸ
ದಲ್ಲಿ ಎದೋಮಿನಲ್ಲಿರುವ ಬುದ್ಧಿವಂತರನ್ನು ನಾಶ
ಮಾಡುವೆನು. ಏಸಾವಿನ ಪರ್ವತದಲ್ಲಿರುವ ಜಾಣ
ರನ್ನು ನಾನು ನಾಶಮಾಡುವೆನು.
9 ತೇಮಾನನೇ, ನಿನ್ನ ಯುದ್ಧವೀರರು ಭಯಪಡು
ವರು. ಏಸಾವಿನ ಪರ್ವತದಲ್ಲಿರುವ ಪ್ರತಿಯೊ
ಬ್ಬನು ನಾಶವಾಗುವನು. ಎಷ್ಟೋ ಮಂದಿ ಹತ
ರಾಗುವರು.

10 ನೀನು ನಾಚಿಕೆಯಿಂದ ಮುಚ್ಚಲ್ಪಡುವೆ, ನಿರಂತ
ರಕ್ಕೂ ನಾಶವಾಗುವೆ. ಯಾಕೆಂದರೆ ನೀನು ನಿನ್ನ
ಸಹೋದರನಾದ ಯಾಕೋಬನೊಂದಿಗೆ ಕ್ರೂರ
ವಾಗಿ ನಡೆದುಕೊಂಡೆ.
11 ನೀನು ಇಸ್ರೇಲರ ವೈರಿಯೊಂದಿಗೆ ಸೇರಿಕೊಂಡೆ.
ಅನ್ಯರು ಇಸ್ರೇಲಿನ ಐಶ್ವರ್ಯವನ್ನು ಎತ್ತಿಕೊಂಡು
ಹೋದರು. ಪರದೇಶಿಗಳು ಇಸ್ರೇಲ್ ಪಟ್ಟಣದ
ಬಾಗಿಲನ್ನು ಪ್ರವೇಶಿಸಿದರು. ಆ ಪರದೇಶಿಗಳು
ಜೆರುಸಲೇಮಿನ ಯಾವ ಭಾಗ ತಮಗೆ ದೊರಕ
ಬೇಕೆಂದು ಚೀಟುಹಾಕಿದರು. ಆಗ ನೀನು ನಿನ್ನ
ಪಾಲನ್ನು ತೆಗೆದುಕೊಳ್ಳಲು ಅವರೊಂದಿಗಿದ್ದೆ.
12 ನಿನ್ನ ಸಹೋದರನ ಸಂಕಟದಲ್ಲಿ ನೀನು ಹರ್ಷಿಸಿದೆ.
ನೀನು ಹಾಗೆ ಮಾಡಬಾರದಾಗಿತ್ತು. ಯೆಹೂದ
ವನ್ನು ನಾಶಮಾಡುವಾಗ ನೀನು ಸಂತೋಷಪಟ್ಟೆ.
ನೀನು ಹಾಗೆ ಮಾಡಬಾರದಾಗಿತ್ತು. ನೀನು ಅವರ

ಸಂಕಟ ಕಾಲದಲ್ಲಿ ಕೊಚ್ಚಿಕೊಂಡೆ. ನೀನು ಹಾಗೆ
ಮಾಡಬಾರದಾಗಿತ್ತು.
13 ನನ್ನ ಜನರ ನಗರದ ಬಾಗಿಲನ್ನು ನೀನು ಪ್ರವೇಶಿಸಿ
ಅವರ ತೊಂದರೆಗಳನ್ನು ನೋಡಿ ನೀನು ಹಾಸ್ಯ
ಮಾಡಿದೆ. ನೀನು ಹಾಗೆ ಮಾಡಬಾರದಾಗಿತ್ತು.
ಅವರು ಸಂಕಟಪಡುತ್ತಿರುವಾಗ ನೀನು ಅವರ
ಐಶ್ವರ್ಯವನ್ನು ಸೂರೆ ಮಾಡಿದೆ. ನೀನು ಹಾಗೆ
ಮಾಡಬಾರದಿತ್ತು.
14 ದಾರಿಯ ಚೌಕದಲ್ಲಿ ನೀನು ನಿಂತುಕೊಂಡು ತಪ್ಪಿಸಿ
ಕೊಂಡು ಹೋಗುವವರನ್ನು ನೀನು ಸಾಯಿಸಿದೆ.
ನೀನು ಹಾಗೆ ಮಾಡಬಾರದಾಗಿತ್ತು. ತಪ್ಪಿಸಿ
ಕೊಂಡು ಹೋದವರನ್ನು ನೀನು ಸೆರೆಹಿಡಿದೆ.
ನೀನು ಹಾಗೆ ಮಾಡಬಾರದಾಗಿತ್ತು.
15 ಎಲ್ಲಾ ಜನಾಂಗಗಳವರಿಗೆ ಯೆಹೋವನ ದಿನವು
ಬೇಗನೇ ಬರುವದು. ನೀನು ಬೇರೆಯವರಿಗೆ
ಮಾಡಿದ ದುಷ್ಟಕೃತ್ಯಗಳನ್ನು ಅವರು ನಿನ್ನ
ಮೇಲೆಯೇ ನಡೆಸುವರು. ಅದೇ ದುಷ್ಟಕಾರ್ಯ
ಗಳು ನಿನ್ನ ತಲೆ ಮೇಲೆ ಬೀಳುವವು.
16 ಯಾಕೆಂದರೆ ನನ್ನ ಪರಿಶುದ್ಧ ಪರ್ವತದಲ್ಲಿ ರಕ್ತ
ವನ್ನು ಸುರಿಸಿದೆ. ನೀನು ಹುಟ್ಟಲೇ ಇಲ್ಲ ಎಂಬು
ದಾಗಿ ಅನಿಸುವದು. ಆದ್ದರಿಂದ ಇತರ ಜನಾಂಗ
ಗಳು ನಿನ್ನ ರಕ್ತವನ್ನು ಸುರಿಸುತ್ತವೆ. ನೀನು ಕೊನೆ
ಗೊಳ್ಳುವೆ.
17 ಆದರೆ ಚೀಯೋನ್ ಬೆಟ್ಟದಲ್ಲಿ ಅಳಿದುಳಿದವರು
ಇರುವರು. ಅವರು ನನ್ನ ವಿಶೇಷ ಜನರಾಗಿರು
ವರು. ಯಾಕೋಬನ ಜನರು ತಮಗೆ ಸೇರಿರುವ
ದನ್ನು ಹಿಂದಕ್ಕೆ ಪಡಕೊಳ್ಳುವರು.
18 ಯಾಕೋಬನ ಸಂತತಿಯವರು ಬೆಂಕಿಯಂತಿರು
ವರು. ಯೋಸೇಫನ ಜನಾಂಗವು ಬೆಂಕಿಯ
ನಾಲಗೆಗಳಂತೆ ಇರುವರು. ಆದರೆ ಏಸಾವಿನ
ಜನಾಂಗ ಸುಟ್ಟ ಬೂದಿಯಂತಿರುವರು. ಯೆಹೂ
ದದ ಜನರು ಏದೋಮನನ್ನು ಸುಟ್ಟುಹಾಕುವರು.
ಯೆಹೂದದ ಜನರು ಏದೋಮನನ್ನು ನಾಶ
ಮಾಡುವರು. ಆಗ ಏಸಾವಿನ ಜನರಲ್ಲಿ ಯಾರೂ
ಉಳಿಯುವದಿಲ್ಲ.'' ಯಾಕೆಂದರೆ ಇದು ದೇವ
ರಾದ ಯೆಹೋವನ ಮಾತು.
19 ಆಗ ನೆಗೆವಿನ ಜನರು ಏಸಾವಿನ ಪರ್ವತಗಳಲ್ಲಿ
ವಾಸಿಸುವರು. ಬೆಟ್ಟದ ಕೆಳಗೆ ವಾಸಿಸುವವರು
ಫಿಲಿಷ್ಟಿಯರ ದೇಶವನ್ನು ಆಕ್ರಮಿಸುವರು. ಎಫ್ರಾ
ಯೀಮ್ ಮತ್ತು ಸಮಾರ್ಯದ ಜನರು ಜೀವಿಸು
ವರು. ಗಿಲ್ಯಾದ್ ಪ್ರಾಂತ್ಯವು ಬೆನ್ಯಾಮೀನರಿಗೆ
ಸೇರುವದು.
20 ಸೆರೆ ಒಯ್ಯಲ್ಪಟ್ಟ ಇಸ್ರೇಲರು ಚಾರೆಪ್ತದವರೆಗೆ
ಕಾನಾನ್ ದೇಶವನ್ನು ವಶಪಡಿಸಿಕೊಳ್ಳುವರು.
ಸೆಫಾರದಿನಲ್ಲಿ ಸೆರೆಯಾಗಿರುವ ಜೆರುಸಲೇಮಿನ
ವರು ನೆಗೆವಿನ ಪಟ್ಟಣಗಳನ್ನು ವಶಪಡಿಸಿ
ಕೊಳ್ಳುವರು.
21 ವಿಜಯಿಗಳು ಚೀಯೋನ್ ಬೆಟ್ಟವನ್ನೇರಿ ಏಸಾ
ವಿನ ಪರ್ವತಗಳಲ್ಲಿ ವಾಸಿಸುವ ಜನರನ್ನಾಳುವರು.
ಆಗ ಸಾಮ್ರಾಜ್ಯವು ಯೆಹೋವನಿಗೆ ಸೇರುವುದು.

# ಯೋನ

## ದೇವರ ಕರೆ, ಯೋನನ ಪಲಾಯನ

1 ಅಮಿತ್ತೈಯ ಮಗನಾದ ಯೋನನಿಗೆ ಯೆಹೋವನು ಹೇಳಿದ್ದೇನೆಂದರೆ, 2 “ನಿನೆವೆಯು ಮಹಾದೊಡ್ಡ ನಗರ. ಅಲ್ಲಿಯ ಜನರ ಅನೇಕ ತರದ ದುಷ್ಟ ಕಾರ್ಯಗಳನ್ನು ನೋಡಿದ್ದೇನೆ. ಆದುದರಿಂದ ನೀನು ಆ ನಗರಕ್ಕೆ ಹೋಗಿ ಅಲ್ಲಿಯ ಜನರಿಗೆ ದುಷ್ಟತನವನ್ನು ನಿಲ್ಲಿಸಿರಿ ಎಂದು ಹೇಳು.”

3 ಯೆಹೋವನಿಗೆ ವಿಧೇಯನಾಗಲು ಯೋನನು ಇಷ್ಟಪಡದೆ. ಆತನಿಂದ ತಪ್ಪಿಸಿಕೊಂಡು ಓಡಿಹೋಗಲು ಪ್ರಯತ್ನಿಸಿ ಯೊಪ್ಪಕ್ಕೆ ಹೋದನು. ಅಲ್ಲಿ ಬಹುದೂರದ ಪಟ್ಟಣವಾದ ತಾರ್ಷೀಷಿಗೆ ಹೋಗುವ ಹಡಗು ಹೊರಡಲು ಸಿದ್ಧವಾಗಿತ್ತು. ಅವನು ಪ್ರಯಾಣದರವನ್ನು ಕೊಟ್ಟು ಹಡಗನ್ನು ಹತ್ತಿದನು. ಆ ಜನರೊಂದಿಗೆ ತಾರ್ಷೀಷಿಗೆ ಪ್ರಯಾಣ ಮಾಡಿ ಯೆಹೋವನಿಂದ ದೂರಹೋಗಬೇಕೆಂಬುದೇ ಅವನ ಬಯಕೆಯಾಗಿತ್ತು.

## ದೊಡ್ಡ ಬಿರುಗಾಳಿ

4 ಆದರೆ ಯೆಹೋವನು ಸಮುದ್ರದ ಮೇಲೆ ದೊಡ್ಡ ಬಿರುಗಾಳಿ ಬೀಸುವಂತೆ ಮಾಡಿದನು. ಬಿರುಗಾಳಿಯು ಸಮುದ್ರದಲ್ಲಿ ದೊಡ್ಡ ಅಲೆಗಳನ್ನು ಎಬ್ಬಿಸಿತು. ಬಿರುಗಾಳಿಯು ಬಲವಾಗಿದ್ದುದರಿಂದ ಹಡಗು ಒಡೆದು ಹೋಗುವುದರಲ್ಲಿತ್ತು. 5 ಹಡಗು ಮುಳುಗಿ ಹೋಗದಂತೆ ಅದನ್ನು ಹಗುರ ಮಾಡಲು ಜನರು ಅದರೊಳಗಿದ್ದ ವಸ್ತುಗಳನ್ನು ಸಮುದ್ರಕ್ಕೆ ಎಸೆದರು. ನಾವಿಕರು ತುಂಬಾ ಭಯಪಟ್ಟಿದ್ದರು. ಪ್ರತಿಯೊಬ್ಬರು ತಮ್ಮ ತಮ್ಮ ದೇವರುಗಳಿಗೆ ಪ್ರಾರ್ಥನೆ ಮಾಡಿದರು.

ಆದರೆ ಯೋನನು ಹಡಗಿನ ಕೆಳಭಾಗಕ್ಕೆ ಹೋಗಿ ಅಲ್ಲಿ ಮಲಗಿ ನಿದ್ರೆ ಮಾಡತೊಡಗಿದನು. 6 ಹಡಗಿನ ಯಜಮಾನನು ಯೋನನನ್ನು ನೋಡಿ, ಏಳು. ಯಾಕೆ ಮಲಗಿಕೊಂಡಿದ್ದೀಯಾ? ನಿನ್ನ ದೇವರಿಗೆ ಪ್ರಾರ್ಥಿಸು. ಒಂದು ವೇಳೆ ನಿನ್ನ ದೇವರು ನಿನ್ನ ಪ್ರಾರ್ಥನೆಯನ್ನು ಕೇಳಿ ನಮ್ಮನ್ನು ರಕ್ಷಿಸಬಹುದು.”

## ಆ ಬಿರುಗಾಳಿಗೆ ಕಾರಣವೇನು?

7 ಆಗ ಪ್ರಯಾಣಿಕರು, “ಯಾರ ನಿಮಿತ್ತ ನಮಗೆ ಈ ಆಪತ್ತು ಬಂತೆಂದು ತಿಳಿದುಕೊಳ್ಳಲು ಚೀಟು ಹಾಕೋಣ” ಅಂದರು.

ಅವರು ಚೀಟು ಹಾಕಿದಾಗ ಆ ಚೀಟು ಯೋನನಿಗೆ ಬಂದಿತು; ಅವನೇ ಅವರ ಸಂಕಟಗಳಿಗೆ ಕಾರಣನೆಂಬುದು ನಿಶ್ಚಯವಾಯಿತು, 8 ಆಗ ಅವರು ಯೋನನಿಗೆ, “ನೋಡು, ನಿನ್ನಿಂದಾಗಿ ನಮಗೆ ಈ ಸಂಕಟ ಬಂದಿದೆ. ನೀನು ಏನು ಮಾಡಿದಿ ಎಂದು ನಮಗೆ ಹೇಳು. ನಿನ್ನ ಕೆಲಸವೇನು? ನೀನು ಎಲ್ಲಿಂದ ಬಂದಿ? ನಿನ್ನ ದೇಶ ಯಾವುದು? ನಿನ್ನ ಜನರು ಯಾರು?” ಎಂದೆಲ್ಲಾ ವಿಚಾರಿಸಿದರು.

9 ಆಗ ಯೋನನು, “ನಾನು ಇಬ್ರಿಯನು, ನಾನು ಭೂಪರಲೋಕಗಳ ದೇವರಾದ ಯೆಹೋವನನ್ನು ಆರಾಧಿಸುವವನು. ಆತನು ಭೂಮಿಯನ್ನೂ ಸಾಗರಗಳನ್ನೂ ನಿರ್ಮಿಸಿದಾತನು” ಎಂದನು.

10 ತಾನು ಯೆಹೋವನಿಂದ ದೂರ ಓಡಿಹೋಗುತ್ತಿರುವದಾಗಿ ಯೋನನು ಜನರಿಗೆ ತಿಳಿಸಿದನು. ಆಗ ಅವರು ಬಹಳವಾಗಿ ಹೆದರಿದರು. “ನಿನ್ನ ದೇವರಿಗೆ ವಿರುದ್ಧವಾಗಿ ಎಂಥಾ ಭಯಂಕರ ಕಾರ್ಯ ಮಾಡಿರುತ್ತೀ?” ಎಂದು ಕೇಳಿದರು.

11 ಬಿರುಗಾಳಿಯೂ ಸಮುದ್ರದ ತೆರೆಗಳೂ ಇನ್ನೂ ಬಲವಾಗಿ ಬೀಸತೊಡಗಿದವು. ಆಗ ಅವರು ಯೋನನಿಗೆ, “ನಮ್ಮನ್ನು ರಕ್ಷಿಸಿಕೊಳ್ಳಲು ನಾವು ಏನು ಮಾಡಬೇಕು? ಸಮುದ್ರವು ಶಾಂತವಾಗಬೇಕಾದರೆ ನಾವೀಗ ನಿನಗೆ ಏನು ಮಾಡಬೇಕು?” ಎಂದು ಕೇಳಿದಾಗ

12 ಯೋನನು, “ಈ ಬಿರುಗಾಳಿಗೆ ನಾನೇ ಕಾರಣ. ಈಗ ನನ್ನನ್ನೆತ್ತಿ ಸಮುದ್ರದೊಳಗೆ ಬಿಸಾಡಿಬಿಡಿರಿ. ಆಗ ಸಮುದ್ರವು ಶಾಂತವಾಗುವುದು” ಎಂದು ಹೇಳಿದನು.

13 ಆದರೆ ಅವರಿಗೆ ಯೋನನನ್ನು ಸಮುದ್ರಕ್ಕೆ ಬಿಸಾಡಲು ಮನಸ್ಸಿಲ್ಲದೆ ಹೋಯಿತು. ಅವರು ಹಡಗನ್ನು ದಡಕ್ಕೆ ನಡೆಸಿಕೊಂಡು ಹೋಗಲು ಪ್ರಯತ್ನಪಟ್ಟರು. ಆದರೆ ಅವರಿಂದ ಸಾಧ್ಯವಾಗಲಿಲ್ಲ. ಬಿರುಗಾಳಿಯೂ

ಸಮುದ್ರದ ತೆರೆಗಳೂ ಹೆಚ್ಚೆಚ್ಚಾಗಿ ಬಲವಾಗುತ್ತಾ ಬಂದವು.

### ಯೋನನಿಗೆ ಶಿಕ್ಷೆ

14ಆಗ ಆ ಜನರು ಯೆಹೋವನಿಗೆ, ‘‘ಯೆಹೋವನೇ, ಈ ಮನುಷ್ಯನು ಕೆಟ್ಟ ಕಾರ್ಯ ಮಾಡಿದ್ದರಿಂದ ನಾವು ಇವನನ್ನು ಸಮುದ್ರಕ್ಕೆ ಬಿಸಾಡುತ್ತೇವೆ. ನಾವು ಒಬ್ಬ ನಿರಪರಾಧಿಯನ್ನು ಕೊಂದೆವು ಎಂಬ ಅಪರಾಧವನ್ನು ನಮ್ಮ ಮೇಲೆ ಹೊರಿಸಬೇಡ. ಅವನನ್ನು ಕೊಂದದ್ದಕ್ಕಾಗಿ ನಮ್ಮನ್ನು ಕೊಲ್ಲಬೇಡ. ನೀನು ಯೆಹೋವನೆಂದು ನಮಗೆ ಗೊತ್ತದೆ. ನಿನಗೆ ಇಷ್ಟಬಂದದ್ದನ್ನು ನೀನು ನೆರವೇರಿಸುತ್ತೀ. ಆದುದರಿಂದ ದಯವಿಟ್ಟು ನಮಗೆ ಕರುಣೆ ತೋರಿಸು’’ ಅಂದರು.

15ಆ ಜನರು ಯೋನನನ್ನು ಸಮುದ್ರದೊಳಗೆ ಬಿಸಾಡಿ ಬಿಟ್ಟರು. ಆಗ ಬಿರುಗಾಳಿಯು ನಿಂತಿತು. ಸಮುದ್ರವು ಶಾಂತವಾಯಿತು. 16ಜನರು ಇದನ್ನು ನೋಡಿದಾಗ ಅವರು ಯೆಹೋವನಿಗೆ ಭಯಪಟ್ಟು ಗೌರವಿಸಿದರು. ಅವರು ಆತನಿಗೆ ಯಜ್ಞವನ್ನರ್ಪಿಸಿ ಹರಕೆ ಹಾಕಿಕೊಂಡರು.

17ಯೋನನು ಸಮುದ್ರದೊಳಗೆ ಬಿದ್ದಾಗ, ಅವನನ್ನು ನುಂಗಿಬಿಡಲು ಯೆಹೋವನು ಒಂದು ದೊಡ್ಡ ಮೀನಿಗೆ ಆಜ್ಞಾಪಿಸಿದನು. ಯೋನನು ಆ ಮೀನಿನ ಹೊಟ್ಟೆಯೊಳಗೆ ಮೂರು ಹಗಲು ಮೂರು ರಾತ್ರಿ ಇದ್ದನು.

2 ಯೋನನು ಮೀನಿನ ಹೊಟ್ಟೆಯೊಳಗಿದ್ದಾಗ ದೇವರಾದ ಯೆಹೋವನಿಗೆ ಪ್ರಾರ್ಥಿಸಿ ಇಂತೆಂದನು:

2 ‘‘ನಾನು ದೊಡ್ಡ ಆಪತ್ತಿನಲ್ಲಿದ್ದೆನು. ಸಹಾಯಕ್ಕಾಗಿ
ನಾನು ಯೆಹೋವನಿಗೆ ಮೊರೆಯಿಟ್ಟೆನು. ಆತನು
ನನಗೆ ಉತ್ತರ ದಯಪಾಲಿಸಿದನು. ನಾನು ಆಳ
ವಾದ ಸಮಾಧಿಯೊಳಗಿದ್ದೆನು. ನಾನು ನಿನಗೆ ಮೊರೆ
ಯಿಟ್ಟಾಗ, ಯೆಹೋವನೇ, ನೀನು ನನ್ನ ಸ್ವರವನ್ನು
ಕೇಳಿದಿ.

3 ‘‘ನೀನು ನನ್ನನ್ನು ಸಮುದ್ರಕ್ಕೆ ಎಸೆದಿ. ನಿನ್ನ ಬಲವಾದ
ತೆರೆಗಳು ನನ್ನ ಮೇಲೆ ದಾಟಿದವು. ನಾನು ಕೆಳಗೆ,
ಕೆಳಗೆ ಆಳವಾದ ಸ್ಥಳಕ್ಕೆ ಹೋದೆನು. ನನ್ನ ಸುತ್ತಲೂ
ಸಮುದ್ರ, ನೀರು ತುಂಬಿದ್ದವು.
4 ಆಗ ನಾನು, ‘ನಾನು ನಿನ್ನ ಕಣ್ಣೆದುರಿನಿಂದ ಹೊರ
ದೂಡಲ್ಪಟ್ಟಿದ್ದೇನೆ.’ ಆದರೂ ನಾನು ನಿನ್ನ
ಪರಿಶುದ್ಧಾಲಯದ ಕಡೆಗೆ ನೋಡುವೆನು.

5 ‘‘ಸಮುದ್ರದ ನೀರು ನನ್ನನ್ನು ಮುಚ್ಚಿಬಿಟ್ಟವು. ನೀರು
ನನ್ನ ಬಾಯಿಯನ್ನು ಮುಚ್ಚಿತು. ಆಗ ನನಗೆ ಉಸಿ
ರಾಡಲಾಗಲಿಲ್ಲ. ನಾನು ಮುಳುಗುತ್ತಾ ಮುಳು
ಗುತ್ತಾ ಸಮುದ್ರದ ಆಳಕ್ಕೆ ಹೋದೆನು. ಸಮುದ್ರ
ಪಾಚಿಗಳು ನನ್ನ ತಲೆಯನ್ನು ಸುತ್ತುಹಾಕಿದವು.
6 ನಾನು ಸಮುದ್ರದ ತಳದಲ್ಲಿದ್ದೆನು. ಅಲ್ಲಿಂದ
ಪರ್ವತಗಳು ಉಗಮವಾಗುತ್ತವೆ. ‘ನಾನು ಈ ಸೆರೆ
ಮನೆಯಲ್ಲಿ ಎಂದೆಂದಿಗೂ ಬಂಧಿತನಾದೆನು’
ಎಂದು ನೆನಸಿದೆನು. ಆದರೆ ನನ್ನ ದೇವರಾದ
ಯೆಹೋವನು ಸಮಾಧಿಯಿಂದ ನನ್ನನ್ನು ಹೊರ
ತಂದನು. ಯೆಹೋವನೇ ನೀನು ಪುನಃ ನನಗೆ
ಜೀವ ಕೊಟ್ಟೆ.

7 ‘‘ನನ್ನ ಆತ್ಮಕ್ಕೆ ಯಾವ ನಿರೀಕ್ಷೆಯೂ ಇರಲಿಲ್ಲ. ಆಗ
ನಾನು ಯೆಹೋವನನ್ನು ಸ್ಮರಿಸಿದೆನು. ಯೆಹೋ
ವನೇ, ನಾನು ನಿನಗೆ ಪ್ರಾರ್ಥಿಸಿದೆನು. ನೀನು ನಿನ್ನ
ಪವಿತ್ರ ಆಲಯದಿಂದ ನನ್ನ ಪ್ರಾರ್ಥನೆಯನ್ನು
ಕೇಳಿದಿ.
8 ಕೆಲವು ಜನರು ಪ್ರಯೋಜನವಿಲ್ಲದ ವಿಗ್ರಹಗ
ಳನ್ನು ಪೂಜಿಸುತ್ತಾರೆ. ಆದರೆ ಆ ವಿಗ್ರಹಗಳು
ಅವರಿಗೆ ಸಹಾಯಮಾಡುವುದಿಲ್ಲ.
9 ರಕ್ಷಣೆಯು ಯೆಹೋವನಿಂದಲೇ ಉಂಟಾಗು
ವದು. ಯೆಹೋವನೇ, ನಾನು ನಿನಗೆ ಯಜ್ಞವನ್ನ
ರ್ಪಿಸುವೆನು. ನಾನು ನಿನ್ನನ್ನು ಕೊಂಡಾಡಿ ಸ್ತೋತ್ರ
ಸಲ್ಲಿಸುವೆನು. ನಾನು ನಿನಗೆ ವಿಶೇಷವಾದ ಹರಕೆ
ಗಳನ್ನು ಹೊರುವೆನು. ನಾನು ಕೊಟ್ಟ ವಚನಗಳನ್ನು
ಪಾಲಿಸುವೆನು.’’

10ಆಗ ಯೆಹೋವನು ಆ ಮೀನಿಗೆ ಆಜ್ಞಾಪಿಸಲು ಆ ಮೀನು ಯೋನನನ್ನು ಒಣನೆಲದಲ್ಲಿ ತನ್ನ ಹೊಟ್ಟೆಯೊಳಗಿಂದ ಕಾರಿಬಿಟ್ಟಿತು.

### ದೇವರ ಕರೆಗೆ ಯೋನನ ವಿಧೇಯತೆ

3 ಯೆಹೋವನು ಯೋನನ ಸಂಗಡ ತಿರುಗಿ ಮಾತನಾಡಿದನು. ಆತನು ಹೇಳಿದ್ದೇನೆಂದರೆ, 2‘‘ಮಹಾ ನಗರವಾದ ನಿನೆವೆಗೆ ನೀನು ಎದ್ದು ಹೋಗಿ ಅಲ್ಲಿ ನಾನು ಹೇಳಿದ್ದನ್ನು ಅವರಿಗೆ ಸಾರು.’’

3ಯೋನನು ಯೆಹೋವನ ಆಜ್ಞೆಗೆ ವಿಧೇಯನಾಗಿ ನಿನೆವೆಗೆ ಬಂದನು. ನಿನೆವೆಯು ಬಹು ವಿಶಾಲವಾದ ನಗರ. ಅದು ಮೂರು ದಿನಗಳ ಪ್ರಯಾಣದಷ್ಟು ದೊಡ್ಡದಿತ್ತು.

4ಯೋನನು ನಗರದ ಮಧ್ಯಕ್ಕೆ ಹೋಗಿ ಜನರಿಗೆ ಸಾರಲಿಕ್ಕೆ ಪ್ರಾರಂಭಿಸಿದನು. ‘‘ನಲವತ್ತು ದಿನಗಳು ಕಳೆದ ಬಳಿಕ ನಿನೆವೆಯು ನಾಶವಾಗುವದು’’ ಎಂದು ಜನರಿಗೆ ಸಾರಿದನು.

5ನಿನೆವೆಯ ಜನರು ದೇವರಿಂದ ಬಂದ ಸಂದೇಶವನ್ನು
ನಂಬಿದರು. ಆ ಜನರು ತಮ್ಮ ಪಾಪಗಳ ಕುರಿತು ಯೋಚಿ
ಸಲು ಉಪವಾಸ ಮಾಡಿದರು. ತಮ್ಮ ಪಶ್ಚಾತ್ತಾಪಕ್ಕೆ ಗುರು
ತಾಗಿ ಶೋಕವಸ್ತ್ರವನ್ನು ಧರಿಸಿದರು. ನಗರದ ಎಲ್ಲಾ
ಜನರು ಹೀಗೆ ಮಾಡಿದರು. ಉನ್ನತ ಅಧಿಕಾರಿಗಳಿಂದ
ಹಿಡಿದು ಕೀಳು ಜನರ ತನಕ ಹಾಗೆ ಮಾಡಿದರು.
6ನಿನೆವೆಯ ಅರಸನು ಇದನ್ನು ಕೇಳಿ ತಾನು ಮಾಡಿದ
ದುಷ್ಕೃತ್ಯಗಳಿಗಾಗಿ ಮನಮರುಗಿದನು. ತಾನು ಸಿಂಹಾಸನ
ದಿಂದಿಳಿದು ರಾಜವಸ್ತ್ರವನ್ನು ತೆಗೆದಿಟ್ಟು ಶೋಕವಸ್ತ್ರವನ್ನು
ಧರಿಸಿ ಬೂದಿಯ ಮೇಲೆ ಕುಳಿತುಕೊಂಡನು. 7ತನ್ನ ಪ್ರಜೆ
ಗಳಿಗೆ ಒಂದು ವಿಶೇಷ ಸಂದೇಶವನ್ನು ಬರೆಯಿಸಿ ನಗರ
ದಲ್ಲೆಲ್ಲಾ ಪ್ರಚುರಪಡಿಸಿದನು. ಅದರಲ್ಲಿ ಹೀಗೆ
ಬರೆದಿತ್ತು.

> ಇದು ಅರಸನ ಮತ್ತು ಆತನ ಆಡಳಿತಗಾರರ ಆಜ್ಞೆ:
> ‘‘ಕೆಲವು ಸಮಯದತನಕ ಯಾವ ವ್ಯಕ್ತಿಯಾಗಲೀ,
> ಪ್ರಾಣಿಯಾಗಲೀ ಅನ್ನಪಾನಗಳನ್ನು ತೆಗೆದುಕೊಳ್ಳ
> ಬಾರದು. ಮಂದೆಯಾಗಲಿ, ಹಿಂಡಾಗಲಿ ಹುಲ್ಲು
> ಗಾವಲಿಗೆ ಹೋಗಬಾರದು. ನಿನೆವೆಯಲ್ಲಿ ವಾಸಿ
> ಸುವ ಯಾವನೆ ಸರಿ, ಊಟ ಮಾಡಬಾರದು,
> ನೀರು ಕುಡಿಯಬಾರದು. 8ಪ್ರತಿ ಮನುಷ್ಯನೂ
> ಪ್ರಾಣಿಯೂ ಶೋಕವಸ್ತ್ರವನ್ನು ಧರಿಸಬೇಕು.
> ಜನರು ದೇವರಿಗೆ ಗಟ್ಟಿಯಾಗಿ ಮೊರೆಯಿಡ
> ಬೇಕು. ಪ್ರತಿಯೊಬ್ಬನು ತನ್ನ ದುಷ್ಟಜೀವಿತವನ್ನು
> ಬದಲಾಯಿಸಿ ದುಷ್ಟತನ ಮಾಡುವದನ್ನು ನಿಲ್ಲಿಸ
> ಬೇಕು. 9ಒಂದು ವೇಳೆ ದೇವರು ತನ್ನ ಮನಸ್ಸನ್ನು
> ಬದಲಾಯಿಸಾನು.ತಾನು ಯೋಚಿಸಿದ್ದನ್ನು ನೆರ
> ವೇರಿಸದೆ ಇರುವನೋ ಏನೋ? ಆತನು ತನ್ನ
> ಯೋಜನೆಯನ್ನು ಹಿಂದೆಗೆದು, ಕೋಪಿಸಿಕೊಳ್ಳದೆ,
> ನಮ್ಮನ್ನು ಶಿಕ್ಷಿಸದೆ ಇರುವನೋ ಏನೋ! ಆಗ
> ನಾವು ನಾಶವಾಗದಿರಬಹುದು!’’

10ಜನರು ಮಾಡಿದವುಗಳನ್ನು ದೇವರು ನೋಡಿದನು;
ಅವರು ದುಷ್ಟತನ ಮಾಡುವದನ್ನು ನಿಲ್ಲಿಸಿದ್ದನ್ನು ಗಮನಿಸಿ
ದನು. ಆತನು ಅವರನ್ನು ದಂಡಿಸಲಿಲ್ಲ.

### ದೇವರ ಕರುಣೆಯು ಯೋನನನ್ನು ಕೋಪಗೊಳ್ಳುವಂತೆ ಮಾಡಿತು

4 ದೇವರು ಆ ನಗರವನ್ನು ಕಾಪಾಡಿದನೆಂದು ಯೋನ
ನಿಗೆ ಸಂತೋಷವಾಗಲಿಲ್ಲ. ಯೋನನಿಗೆ ಸಿಟ್ಟು
ಬಂದಿತು. 2ಯೋನನು ಯೆಹೋವನಿಗೆ ದೂರು
ಹೇಳುತ್ತಾ, ‘‘ಇದು ಹೀಗಾಗುತ್ತದೆಯೆಂದು ನನಗೆ
ಗೊತ್ತಿತ್ತು. ನಾನು ನನ್ನ ದೇಶದಲ್ಲಿದ್ದೆ. ಇಲ್ಲಿಗೆ ಬರಲು
ನನಗೆ ಹೇಳಿದವನು ನೀನೇ. ಈ ದುಷ್ಟ ಪಟ್ಟಣದ ಜನ
ರನ್ನು ನೀನು ಕ್ಷಮಿಸುತ್ತೀ ಎಂದು ನನಗೆ ಆಗಲೇ
ಗೊತ್ತಿತ್ತು. ಆದುದರಿಂದ ನಾನು ತಾರ್ಷೀಷಿಗೆ ಓಡಿ
ಹೋಗಲು ನಿರ್ಧರಿಸಿದೆನು. ನೀನು ದಯಾಪರನಾದ,
ಕೃಪಾಪೂರ್ಣನಾದ, ಕೋಪಗೊಳ್ಳುವುದರಲ್ಲಿ ನಿಧಾನ
ವಾದ ಮತ್ತು ಮಹಾಕನಿಕರವುಳ್ಳ ದೇವರೆಂದು ನನಗೆ
ಗೊತ್ತಿತ್ತು. ಆ ಜನರು ಪಾಪ ಮಾಡುವದನ್ನು ನಿಲ್ಲಿಸಿದರೆ,
ನೀನು ನಿನ್ನ ಯೋಜನೆಯಂತೆ ಅವರನ್ನು ನಾಶಮಾಡು
ವುದಿಲ್ಲ ಎಂದು ನನಗೆ ಗೊತ್ತಿತ್ತು. 3ಆದುದರಿಂದ ನಾನು
ಹೇಳುವದೇನೆಂದರೆ ನನ್ನ ದೇವರೇ ನೀನು ನನ್ನನ್ನು
ಕೊಂದುಬಿಡು. ನಾನು ಬದುಕುವದಕ್ಕಿಂತ ಸಾಯುವುದೇ
ಮೇಲು.’’
4ಆಗ ಯೆಹೋವನು ಅವನಿಗೆ, ‘‘ನಾನು ಆ ಜನರನ್ನು
ನಾಶಮಾಡದೆ ಹೋದುದರಿಂದ ನೀನು ಸಿಟ್ಟುಗೊಳ್ಳು
ವದು ಸರಿಯೇ?’’ ಎಂದು ಕೇಳಿದನು.
5ಇವೆಲ್ಲಾ ಯೋನನನ್ನು ಇನ್ನೂ ಸಿಟ್ಟುಗೊಳಿಸಿದ್ದವು.
ಅವನು ನಗರದ ಹೊರಗೆ ಪೂರ್ವದ ಕಡೆಗೆ ಹೋಗಿ ತನ
ಗೊಂದು ಮಂಟಪವನ್ನು ಕಟ್ಟಿ ಅದರ ನೆರಳಿನಲ್ಲಿ ಕುಳಿತು
ಕೊಂಡು ನಗರಕ್ಕೆ ಏನಾಗುವದು ಎಂಬದನ್ನು ಕಾಯುತ್ತಾ
ಕುಳಿತನು.

### ಸೋರೇ ಗಿಡ ಮತ್ತು ಹುಳು

6ದೇವರಾದ ಯೆಹೋವನು ಒಂದು ಸೋರೇ ಗಿಡ
ವನ್ನು ಯೋನನ ಬಳಿಯಲ್ಲಿಯೇ ಶೀಘ್ರ ಬೆಳೆಯ ಮಾಡಿ
ದನು. ಆ ಸೋರೆ ಗಿಡವು ಆ ಜಾಗವನ್ನು ತಂಪು ಮಾಡಿದ್ದ
ರಿಂದ ಯೋನನಿಗೆ ತುಂಬಾ ಹಿತವಾಯಿತು ಮತ್ತು
ತುಂಬಾ ಸಂತೋಷವಾಯಿತು.
7ಮರುದಿನ ಮುಂಜಾನೆ, ದೇವರು ಆ ಗಿಡವನ್ನು
ತಿನ್ನಲು ಒಂದು ಹುಳುವನ್ನು ಕಳುಹಿಸಿದನು. ಆ ಹುಳುವು
ಗಿಡವನ್ನು ತಿಂದ ನಿಮಿತ್ತ ಅದು ಬಾಡಿಹೋಗಿ ಸತ್ತಿತ್ತು.
8ಸೂರ್ಯನು ಆಕಾಶದಲ್ಲಿ ಏರಿ ಬಂದಾಗ ದೇವರು
ಪೂರ್ವದ ಬಿಸಿಗಾಳಿ ಬೀಸುವಂತೆ ಮಾಡಿದನು. ಬಿಸಿಲಿನ
ತಾಪವು ಯೋನನ ತಲೆಯ ಮೇಲೆ ಹೆಚ್ಚಾಯಿತು.
ಯೋನನಿಗೆ ಶಾಖ ತಡೆಯಲಾಗಲಿಲ್ಲ. ಬಹಳ ಬಲಹೀನ
ನಾದನು. ನನ್ನನ್ನು ಸಾಯಿಸು ಎಂದು ಯೋನನು ದೇವ
ರನ್ನು ಬೇಡುತ್ತಾ, ‘‘ದೇವರೇ, ನಾನು ಬದುಕುವದಕ್ಕಿಂತ
ಸಾಯುವುದೇ ಲೇಸು’’ ಅಂದನು.
9ಆದರೆ ದೇವರು ಯೋನನಿಗೆ ಹೇಳಿದ್ದೇನೆಂದರೆ, ‘‘ಆ
ಸೋರೇ ಗಿಡವು ಸತ್ತು ಹೋದುದಕ್ಕೆ ನೀನು ಕೋಪ
ಗೊಳ್ಳುವುದು ಸರಿಯೋ?’’

ಅದಕ್ಕುತ್ತರವಾಗಿ ಯೋನನು, ‘‘ಹೌದು! ನಾನು ಕೋಪಗೊಂಡದ್ದು ನಿಜ. ನಾನು ಸಾಯುವಷ್ಟು ಕೋಪ ಗೊಂಡಿದ್ದೇನೆ’’ ಅಂದನು.
10 ಆಗ ಯೆಹೋವನು, ‘‘ನೀನು ಆ ಸೋರೆ ಗಿಡಕ್ಕಾಗಿ ಏನೂ ಮಾಡಲಿಲ್ಲ. ಅದು ಬೆಳೆಯುವಂತೆ ನೀನು ಮಾಡ ಲಿಲ್ಲ. ಅದು ರಾತ್ರಿಯಲ್ಲಿ ಬೆಳೆಯಿತು. ಮರುದಿನ ಅದು ಸತ್ತಿತ್ತು. ಈಗ ನೀನು ಅದಕ್ಕಾಗಿ ದುಃಖಪಡುತ್ತಿರುವೆ.
11 ಒಂದು ಗಿಡಕ್ಕಾಗಿ ನೀನು ಇಷ್ಟೊಂದು ದುಃಖ ಗೊಂಡರೆ, ನಿನೆವೆಯಂತಹ ಇಷ್ಟು ದೊಡ್ಡ ನಗರಕ್ಕಾಗಿ ನನಗೂ ಖಂಡಿತವಾಗಿ ದುಃಖವಾಗುತ್ತದೆ. ಈ ನಗರದಲ್ಲಿ ಅನೇಕಾನೇಕ ಜನರಿದ್ದಾರೆ! ಅನೇಕ ಪ್ರಾಣಿಗಳಿವೆ. ಈ ನಗರದಲ್ಲಿರುವ ಒಂದು ಲಕ್ಷದ ಇಪ್ಪತ್ತು ಸಾವಿರ ಮಂದಿ ಜನರಿಗೆ ತಾವು ತಪ್ಪುಮಾಡುತ್ತಿರುವುದಾಗಿ ತಿಳಿದಿರಲಿಲ್ಲ’’ ಅಂದನು.

# ಮೀಕ

## ಇಸ್ರೇಲ್ ಮತ್ತು ಸಮಾರ್ಯವು ಶಿಕ್ಷಿಸಲ್ಪಡಬೇಕು

1 ಯೆಹೋವನ ಮಾತುಗಳು ಮೀಕನಿಗೆ ಬಂದವು. ಅರಸರಾದ ಯೋಥಾಮ, ಅಹಾಜ ಮತ್ತು ಹಿಜ್ಕೀಯರ ಆಳ್ವಿಕೆಯ ಸಮಯದಲ್ಲಿ ಇದು ನಡೆಯಿತು. ಇವರು ಯೆಹೂದ ರಾಜ್ಯದ ಅರಸರು. ಮೀಕನು ಮೋರೆಷೆತ್‌ನವನು. ಇವನು ಸಮಾರ್ಯ ಮತ್ತು ಜೆರುಸಲೇಮಿನ ವಿಷಯವಾಗಿ ದೇವದರ್ಶನವನ್ನು ಹೊಂದಿದನು.

2 ಎಲ್ಲಾ ಜನರೇ, ಕೇಳಿರಿ! ಭೂಮಿಯೂ ಅದರಲ್ಲಿರುವವರೆಲ್ಲರೂ ಕೇಳಿರಿ! ನನ್ನ ಒಡೆಯನಾದ ಯೆಹೋವನು ತನ್ನ ಪವಿತ್ರ ಆಲಯದಿಂದ ಬರುವನು. ನಿಮ್ಮ ವಿರುದ್ಧ ಸಾಕ್ಷಿಯಾಗಿ ಆತನು ಬರುವನು.
3 ಯೆಹೋವನು ತನ್ನ ಸ್ಥಳದಿಂದ ಹೊರಟು ಬರುವುದನ್ನು ನೋಡಿರಿ. ಆತನು ಲೋಕದ ಬೆಟ್ಟಗಳ ಮೇಲೆ ನಡೆಯಲು ಬರುತ್ತಿದ್ದಾನೆ.
4 ಬೆಂಕಿಯಲ್ಲಿ ಮೇಣವು ಕರಗುವಂತೆ ಬೆಟ್ಟಗಳು ಆತನ ಪಾದದಡಿಯಿಂದ ಕರಗಿ ಹೋಗುತ್ತವೆ. ತಗ್ಗುಗಳು ಇಬ್ಭಾಗವಾಗಿ ನೀರಿನಂತೆ ಕಡಿದಾದ ಸ್ಥಳದಿಂದ ಹರಿದು ಹೋಗುತ್ತವೆ.
5 ಇದಕ್ಕೆಲ್ಲಾ ಕಾರಣ ಯಾಕೋಬನ ಪಾಪಗಳೇ, ಇಸ್ರೇಲರ ದ್ರೋಹಗಳೇ!.

## ಪಾಪಕ್ಕೆ ಕಾರಣ ಸಮಾರ್ಯವೇ

ಯಾಕೋಬು ಪಾಪ ಮಾಡಿದಕ್ಕೆ ಕಾರಣವೇನು? ಸಮಾರ್ಯವೇ ಕಾರಣ. ಯೆಹೂದದ ಎತ್ತರವಾದ ಸ್ಥಳ ಯಾವುದು?* ಅದೇ ಜೆರುಸಲೇಮ್.
6 ಆದುದರಿಂದ ನಾನು ಸಮಾರ್ಯವನ್ನು ಕಲ್ಲಿನ ರಾಶಿಯನ್ನಾಗಿ ಮಾಡುವೆನು. ಅದು ದ್ರಾಕ್ಷಾಬಳ್ಳಿ ನೆಡಲು ಸಿದ್ಧವಾಗುವುದು. ಸಮಾರ್ಯದ ಕಲ್ಲುಗಳನ್ನೆಲ್ಲಾ ತಗ್ಗಿಗೆ ನೂಕಿಬಿಡುವೆನು; ಆಗ ಅಲ್ಲಿ ಬರಿ ಅಸ್ತಿವಾರಗಳು ಕಾಣುವವು.
7 ಆಕೆಯ ವಿಗ್ರಹಗಳೆಲ್ಲಾ ಒಡೆದು ಪುಡಿ ಮಾಡಲ್ಪಡುವವು. ಆಕೆಯ ಸೂಳೆತನದ ಹಣವು ಬೆಂಕಿಯಲ್ಲಿ ಸುಡಲ್ಪಡುವುದು. ಆಕೆಯ ಸುಳ್ಳುದೇವರ ವಿಗ್ರಹಗಳನ್ನೆಲ್ಲಾ ನಾಶಮಾಡುವೆನು. ಯಾಕಂದರೆ ಸಮಾರ್ಯ ನನಗೆ ಅಪನಂಬಿಗಸ್ತಳಾಗಿ ಧನಿಕಳಾದಳು. ಅದನ್ನು ನನಗೆ ನಂಬಿಗಸ್ತರಲ್ಲದವರು ಆಕೆಯಿಂದ ಕಸಿದುಕೊಳ್ಳುವರು.

## ಮೀಕನ ಮಹಾ ದುಃಖ

8 ಮುಂಬರುವ ಸಂಭವಗಳಿಗಾಗಿ ನಾನು ಬಹಳ ದುಃಖಿತನಾಗಿದ್ದೇನೆ. ಬಟ್ಟೆಬರೆ, ಕೆರಗಳಿಲ್ಲದೆ ನಾನು ನಡೆಯುವೆನು. ನಾಯಿಯಂತೆ ಮೊರೆಯಿಡುವೆನು, ಪಕ್ಷಿಯಂತೆ ಮುಲುಗುವೆನು.
9 ಸಮಾರ್ಯದ ಗಾಯವು ವಾಸಿಯಾಗದು. ಆಕೆಯ ರೋಗವು (ಪಾಪ) ಯೆಹೂದಕ್ಕೆ ಹಬ್ಬಿಯದೆ. ಅದು ನನ್ನ ಜನರ ಪಟ್ಟಣದ ಹೆಬ್ಬಾಗಿಲಿನವರೆಗೆ ಹೋಗಿದೆ. ಜೆರುಸಲೇಮಿನ ತನಕ ಪಸರಿಸಿಯದೆ.
10 ಇದನ್ನು ಗತ್‌ನಲ್ಲಿ ತಿಳಿಸಬೇಡಿ. ಅಕ್ಕೊದಲ್ಲಿ ಅಳಬೇಡಿರಿ. ಬೆತ್ ಒಫ್ರದ ಧೂಳಿನಲ್ಲಿ ಹೊರಳಾಡಿರಿ.
11 ಶಾಫೀರ್‌ನಲ್ಲಿ ವಾಸಿಸುವವರೇ, ಬೆತ್ತಲೆಯಾಗಿ ನಾಚಿಕೆಯಿಂದ ನಡೆಯಿರಿ. ಚಾನಾನ್‌ನಲ್ಲಿ ವಾಸಿಸುವವರು ಹೊರಗೆ ಬರುವದಿಲ್ಲ. ಬೇತೇಚೆಲಿನ ಜನರು ಅಳುವರು, ನಿಮಗೆ ಅವರು ನೀಡುತ್ತಿದ್ದ ಬೆಂಬಲವನ್ನು ಹಿಂತೆಗೆದುಕೊಳ್ಳುವರು.
12 ಮಾರೊತ್‌ನಲ್ಲಿ ವಾಸಿಸುವ ಜನರು ಬಲಹೀನರಾಗಿದ್ದಾರೆ. ಅವರು ಶುಭವಾರ್ತೆಗಾಗಿ ಕಾಯುತ್ತಿದ್ದಾರೆ. ಯಾಕೆಂದರೆ ಜೆರುಸಲೇಮಿನ ನಗರ ದ್ವಾರದ ಬಳಿಗೆ ಯೆಹೋವನಿಂದ ಆಪತ್ತು ಬಂದಿದೆ.
13 ಲಾಕೀಷಿನ ಸ್ತ್ರೀಯೇ, ವೇಗವಾಗಿ ಓಡುವ ಕುದುರೆಯನ್ನು ನಿನ್ನ ಬಂಡಿಗೆ ಬಿಗಿ. ಚೀಯೋನಿನ ಪಾಪವು ಲಾಕೀಷಿನಲ್ಲಿ ಪ್ರಾರಂಭವಾಯಿತು. ಯಾಕೆಂದರೆ ನೀನು ಇಸ್ರೇಲಿನ ಪಾಪವನ್ನು ಅನುಸರಿಸಿದಿ.

---

**ಎತ್ತರವಾದ ಸ್ಥಳ :** ಪೂಜಾಸ್ಥಳ.

14 ಆದುದರಿಂದ ಗತ್‌ನಲ್ಲಿರುವ ಮೋರೆಷತ್‌ಗೆ
ವಿದಾಯ ಕಾಣಿಕೆಗಳನ್ನು ಕೊಡು. ಅಕ್ಜೀಬಿನ
ಕುಟುಂಬಗಳು ಇಸ್ರೇಲ್ ಅರಸರನ್ನು ಮೋಸ
ಪಡಿಸುವವು.
15 ಮಾರೇಷದಲ್ಲಿ ವಾಸಿಸುವ ಜನರೇ, ನಿಮಗೆ ವಿರುದ್ಧ
ವಾಗಿ ನಾನೊಬ್ಬ ವ್ಯಕ್ತಿಯನ್ನು ಕರೆತರುವೆನು.
ಅವನು ನಿಮ್ಮ ಬಳಿಯಲ್ಲಿರುವ ವಸ್ತುಗಳನ್ನು ಕಿತ್ತು
ಕೊಳ್ಳುವನು. ಇಸ್ರೇಲಿನ ಮಹಿಮೆಯು (ದೇವರ)
ಅದುಲ್ಲಾಮಿಗೆ ಬರುವವು.
16 ನಿನ್ನ ಕೂದಲನ್ನು ಬೋಳಿಸು; ಯಾಕೆಂದರೆ ನೀನು
ಪ್ರೀತಿಸುವ ಮಕ್ಕಳಿಗಾಗಿ ನೀನು ಅಳುವೆ. ಗಿಡುಗ
ನಂತೆ ನಿನ್ನ ತಲೆ ಬೋಳಾಗಲಿ. ನಿನ್ನ ದುಃಖವನ್ನು
ಪ್ರದರ್ಶಿಸು. ಯಾಕೆಂದರೆ ನಿನ್ನ ಮಕ್ಕಳು ನಿನ್ನಿಂದ
ತೆಗೆಯಲ್ಪಡುವರು.

### ಜನರ ದುಷ್ಟ ಯೋಚನೆಗಳು

2 ಪಾಪ ಮಾಡಲು ಯೋಚಿಸುವವರಿಗೆ ಸಂಕಟವು
ಒದಗುವದು. ಇವರು ಹಾಸಿಗೆಯ ಮೇಲೆ ಬಿದ್ದು
ಕೊಂಡು ಪಾಪ ಮಾಡಲು ಯೋಚಿಸುತ್ತಾರೆ.
ಬೆಳಗ್ಗೆ ಸೂರ್ಯ ಮೂಡಲು ತಾವು ಯೋಚಿಸಿದ
ಪಾಪವನ್ನು ಕಾರ್ಯಗತ ಮಾಡುತ್ತಾರೆ. ಯಾಕೆ?
ಯಾಕೆಂದರೆ ಅವರಿಗೆ ತಮ್ಮ ಇಷ್ಟ ಪ್ರಕಾರ ನಡೆದು
ಕೊಳ್ಳಲು ಬಲವಿದೆ.
2 ಅವರಿಗೆ ಹೊಲಗದ್ದೆಗಳು ಬೇಕು, ಅದನ್ನು ಅವರು
ತೆಗೆದುಕೊಳ್ಳುವರು. ಅವರಿಗೆ ಮನೆಮಠಗಳು
ಬೇಕು, ಅದನ್ನು ಅವರು ತೆಗೆದುಕೊಳ್ಳುವರು.
ಒಬ್ಬನಿಗೆ ಮೋಸಮಾಡಿ ಅವನ ಮನೆಯನ್ನು ಕಿತ್ತು
ಕೊಳ್ಳುವರು. ಇನ್ನೊಬ್ಬನಿಗೆ ಮೋಸಮಾಡಿ ಅವನ
ಹೊಲಗದ್ದೆಗಳನ್ನು ಕಿತ್ತುಕೊಳ್ಳುವರು.

### ಜನರನ್ನು ಶಿಕ್ಷಿಸಲು ಯೆಹೋವನ ಯೋಜನೆ

3 ಅದಕ್ಕಾಗಿಯೇ ಯೆಹೋವನು ಹೀಗೆ ಹೇಳು
ತ್ತಾನೆ: ‘‘ನೋಡಿ, ನಾನು ಈ ಕುಟುಂಬದ ವಿರುದ್ಧ
ವಾಗಿ ಸಂಕಟ ತರಲು ಯೋಚಿಸುತ್ತಿದ್ದೇನೆ. ನಿನ್ನನ್ನು
ನೀನು ರಕ್ಷಿಸಲು ಸಾಧ್ಯವಿರುವುದಿಲ್ಲ. ಭಯಂಕರ
ದಿವಸಗಳು ಬರುವದರಿಂದ ನೀನು ಉಬ್ಬಿಕೊಳ್ಳು
ವುದನ್ನು ನಿಲ್ಲಿಸುವಿ.
4 ಆಗ ಜನರು ನಿನ್ನ ಬಗ್ಗೆ ಗಾನ ಹಾಡುವರು. ಜನರು
ಶೋಕ ಗೀತೆಯನ್ನು ಹಾಡುವರು. ‘ನಾವು ನಾಶ
ವಾದೆವು! ಯೆಹೋವನು ನಮ್ಮ ದೇಶವನ್ನು
ನಮ್ಮಿಂದ ತೆಗೆದುಕೊಂಡನು ಮತ್ತು ಇತರ ಜನರಿಗೆ
ಕೊಟ್ಟನು. ಹೌದು, ಆತನು ನನ್ನ ಭೂಮಿ ಯನ್ನು
ನನ್ನಿಂದ ತೆಗೆದುಕೊಂಡು ಬಿಟ್ಟನು, ನಮ್ಮ
ಗದ್ದೆಗಳನ್ನು ಯೆಹೋವನು ನಮ್ಮ ವೈರಿಗಳಿಗೆ
ಪಾಲುಮಾಡಿ ಕೊಟ್ಟನು.
5 ಈಗ ನಾವು ನಮ್ಮ ದೇಶವನ್ನು ಅಳತೆಮಾಡಿ ದೇವ
ಜನರಿಗೆ ಹಂಚಲು ಆಗುವದಿಲ್ಲ.’’

### ಮೀಕನನ್ನು ಬೋಧಿಸಬಾರದೆಂದು ಹೇಳಿದ್ದು

6 ಜನರು ‘‘ನೀನು ನಮಗೆ ಬೋಧಿಸಬೇಡ, ಆ ಕೆಟ್ಟ
ವಿಷಯಗಳನ್ನು ನಮಗೆ ಹೇಳಬೇಡ, ನಮಗೆ
ಯಾವದೂ ಕೆಟ್ಟ ವಿಷಯ ಸಂಭವಿಸುವುದಿಲ್ಲ’’
ಎಂದು ಹೇಳುತ್ತಾರೆ.
7 ಆದರೆ ಯಾಕೋಬಿನ ಜನರೇ, ನಾನು ನಿಮಗೆ
ಹೇಳಲೇಬೇಕು. ನಿಮ್ಮ ದುಷ್ಟತನದ ನಿಮಿತ್ತ
ಯೆಹೋವನು ತನ್ನ ತಾಳ್ಮೆಯನ್ನು ಕಳಕೊಂಡಿ
ದ್ದಾನೆ. ನೀನು ನ್ಯಾಯವಾದ ರೀತಿಯಲ್ಲಿ ಜೀವಿಸು
ತ್ತಿದ್ದರೆ ನಾನು ನಿಮಗೆ ಒಳ್ಳೇ ಸಂಗತಿಗಳನ್ನು
ತಿಳಿಸುತ್ತಿದ್ದೆ.
8 ಆದರೆ ನನಗೆ ವೈರಿಯಂತೆ* ಎದ್ದು ನಿಂತಿರುವ ನನ್ನ
ಜನರೇ, ನೀವು ಹಾದು ಹೋಗುವವರ ಬಟ್ಟೆ
ಯನ್ನು ಅವರ ಬೆನ್ನಿನ ಮೇಲಿಂದ ಕಿತ್ತುಕೊಳ್ಳು
ತ್ತೀರಿ. ನಿಭರ್ಯವಾಗಿ ಓಡಾಡುವ ಜನರಿಂದ
ಕೈದಿಗಳೋ ಎಂಬಂತೆ ಸುಲಿದುಕೊಳ್ಳುತ್ತೀರಿ.
9 ನನ್ನ ಜನರ ಸ್ತ್ರೀಯರ ಕೈಯಿಂದ ಅಂದವಾದ ಮನೆ
ಗಳನ್ನು ಕಿತ್ತುಕೊಂಡಿದ್ದೀರಿ; ಅವರ ಚಿಕ್ಕಮಕ್ಕಳಿಂದ
ನನ್ನ ಐಶ್ವರ್ಯವನ್ನು ನಿರಂತರಕ್ಕೂ ಕಿತ್ತು
ಕೊಂಡಿದ್ದೀರಿ.
10 ಎದ್ದು ಈ ಸ್ಥಳವನ್ನು ಬಿಟ್ಟುಹೋಗು. ಇದು ನಿನ್ನ
ವಿಶ್ರಾಂತಿಯ ಸ್ಥಳವಲ್ಲ. ನೀನು ಇದನ್ನು ಹಾಳು
ಮಾಡಿರುತಿ; ಹೊಲಸು ಮಾಡಿರುವೆ; ಆದುದ
ರಿಂದ ಇದು ನಾಶವಾಗುವದು; ಭಯಂಕರ ರೀತಿ
ಯಲ್ಲಿ ಕೆಡವಲ್ಪಡುವದು.
11 ಈ ಜನರು ನನ್ನ ಮಾತುಗಳನ್ನು ಕೇಳಲು ಇಷ್ಟ
ಪಡುವದಿಲ್ಲ. ಆದರೆ ಬೇರೊಬ್ಬನ ಸುಳ್ಳು ಮಾತು
ಗಳನ್ನು ಕೇಳಲು ಇಷ್ಟಪಡುವರು. ಸುಳ್ಳು ಪ್ರವಾ
ದಿಯು ಬಂದು, ‘‘ನಿಮಗೆ ಒಳ್ಳೆಯ ಭವಿಷ್ಯವಿದೆ.
ಬೇಕಾದಷ್ಟು ದ್ರಾಕ್ಷಾರಸ, ಮದ್ಯವು ನಿಮಗೆ ದೊರ
ಕುವವು’’ ಎಂದು ಹೇಳಿದರೆ ಅವರು ಅವನನ್ನು
ನಂಬಿ ಸ್ವೀಕರಿಸಿಕೊಳ್ಳುವರು.

---

**ವೈರಿಯಂತೆ** ಯೆಹೋವನ ವಿರುದ್ಧವಾಗಿ ಅಥವಾ ತಮಗೆ ವಿರುದ್ಧ
ವಾಗಿ ತಾವೇ.

### ಯೆಹೋವನು ತನ್ನ ಜನರನ್ನು ಒಟ್ಟುಗೂಡಿಸುತ್ತಾನೆ

12 ಯಾಕೋಬಿನ ಜನರೇ, ನಾನು ನಿಮ್ಮೆಲ್ಲರನ್ನು
ಒಟ್ಟು ಸೇರಿಸುತ್ತೇನೆ. ಇಸ್ರೇಲಿನಲ್ಲಿ ಉಳಿದವರ
ನ್ನೆಲ್ಲಾ ಒಟ್ಟುಗೂಡಿಸುತ್ತೇನೆ. ಹಟ್ಟಿಯೊಳಗೆ ಕುರಿ
ಗಳನ್ನು ಸೇರಿಸುವಂತೆ, ಹುಲ್ಲುಗಾವಲಿನಲ್ಲಿ ಕುರಿ
ಮಂದೆ ಸೇರಿಸಲ್ಪಡುವಂತೆ ನಾನು ಅವರನ್ನು ಒಟ್ಟು
ಮಾಡುವೆನು. ಆಗ ಈ ಸ್ಥಳವು ಜನಸಮೂಹದ
ಗದ್ದಲದಿಂದ ತುಂಬಿಹೋಗುವುದು.
13 ಆಗ ಒಡೆದು ಹಾಕುವವನು* ಜನಗಳ ಮುಂದೆ
ಮುನ್ನುಗ್ಗಿ ಹೋಗಿ, ದ್ವಾರಗಳನ್ನು ಒಡೆದು ಹಾಕಿ
ಪಟ್ಟಣವನ್ನು ಬಿಟ್ಟು ಹೋಗುವರು. ಅವರು ತಮ್ಮ
ರಾಜನನ್ನೂ ಕರ್ತನನ್ನೂ ಹಿಂಬಾಲಿಸಿಕೊಂಡು
ಅಲ್ಲಿಂದ ಹೋಗುವರು.

### ಇಸ್ರೇಲಿನ ನಾಯಕರು ದುಷ್ಟತ್ವವನ್ನು ನಡಿಸಿದ್ದಾರೆ

3 ಆಗ ನಾನು ಹೇಳಿದ್ದೇನೆಂದರೆ, ‘‘ಯಾಕೋಬಿನ
ನಾಯಕರೇ, ಇಸ್ರೇಲಿನ ಅಧಿಪತಿಗಳೇ, ನನ್ನ
ಮಾತನ್ನು ಕೇಳಿರಿ. ನ್ಯಾಯ ಏನು ಎಂದು ನಿಮಗೆ
ತಿಳಿದಿರಬೇಕು.
2 ನೀವು ಶಿಷ್ಟತನವನ್ನು ದ್ವೇಷಿಸಿ ದುಷ್ಟತ್ವವನ್ನು
ಪ್ರೀತಿಸುತ್ತೀರಿ! ನೀವು ಜನರ ಚರ್ಮವನ್ನು ಸುಲಿ
ಯುತ್ತಾ ಅವರ ಎಲುಬುಗಳಿಂದ ಮಾಂಸವನ್ನು
ಕಿತ್ತು ತೆಗೆಯುತ್ತೀರಿ.
3 ನೀವು ನನ್ನ ಜನರ ದೇಹದಿಂದ ಚರ್ಮ ತೆಗೆದು
ಎಲುಬುಗಳನ್ನು ತುಂಡುಮಾಡಿ ಅವರನ್ನು ನಾಶ
ಮಾಡುತ್ತೀರಿ. ತಪ್ಪಲೆಯೊಳಗೆ ಬೇಯಿಸಲು
ಮಾಂಸ ತುಂಡು ಮಾಡಿ ಹಾಕುವಂತೆ ನೀವು ಅವರ
ಎಲುಬುಗಳನ್ನು ತುಂಡು ಮಾಡುತ್ತೀರಿ.
4 ನೀವು ಯೆಹೋವನಿಗೆ ಪ್ರಾರ್ಥಿಸಬಹುದು. ಆದರೆ
ಆತನು ನಿಮಗೆ ಉತ್ತರಕೊಡುವದಿಲ್ಲ. ನಿಮ್ಮ ಕೆಟ್ಟ
ಪಾಪಗಳ ನಿಮಿತ್ತ ತನ್ನ ಮುಖವನ್ನು ಮರೆಮಾಡಿ
ಕೊಳ್ಳುತ್ತಾನೆ.’’

### ಸುಳ್ಳುಪ್ರವಾದಿಗಳು

5 ಕೆಲವು ಸುಳ್ಳು ಪ್ರವಾದಿಗಳೆದ್ದು ಯೆಹೋವನ
ಜನರಿಗೆ ಸುಳ್ಳನ್ನು ತಿಳಿಸುತ್ತಾರೆ. ಅಂಥವರ ಬಗ್ಗೆ
ಯೆಹೋವನು ಹೇಳುವದೇನೆಂದರೆ,

‘‘ಈ ಪ್ರವಾದಿಗಳ ಮಾತುಗಳು ಅವರ ಹೊಟ್ಟೆಗಳನ್ನ
ವಲಂಭಿಸಿಯದೆ. ಜನರು ಅವರಿಗೆ ಆಹಾರ
ಕೊಟ್ಟರೆ ಶಾಂತಿಯನ್ನು ವಾಗ್ದಾನ ಮಾಡುತ್ತಾರೆ.
ಜನರು ಅವರಿಗೆ ಊಟ ಕೊಡದೆ ಹೋದರೆ
ಯುದ್ಧವನ್ನು ವಾಗ್ದಾನ ಮಾಡುತ್ತಾರೆ.

6 ಹೀಗಿರುವದರಿಂದ ಅದು ನಿಮಗೆ ರಾತ್ರಿಯಂತಿರು
ವದು. ನಿಮಗೆ ದರ್ಶನಗಳಾಗುವದಿಲ್ಲ. ಮುಂದೆ
ಏನು ಸಂಭವಿಸುತ್ತದೆ ಎಂಬುದನ್ನು ನೀವು
ನೋಡುವದಿಲ್ಲ. ಆದುದರಿಂದ ಅದು ನಿಮಗೆ
ಕತ್ತಲೆಯಂತಿದೆ. ಪ್ರವಾದಿಗಳಿಗೆ ಸೂರ್ಯನು
ಮುಳುಗಿರುತ್ತಾನೆ. ಅವರಿಗೆ ಮುಂದೆ ಆಗು
ವಂಥದು ಕಾಣಿಸುವದಿಲ್ಲ. ಆದುದರಿಂದ ಅವರಿಗೆ
ಎಲ್ಲಾ ಕತ್ತಲೆಯಾಗಿದೆ.
7 ದೇವದರ್ಶಿಗಳು ನಾಚಿಗೊಂಡಿದ್ದಾರೆ. ಭವಿಷ್ಯ
ಹೇಳುವವರು ನಾಚಿಕೆಗೊಳಗಾಗಿದ್ದಾರೆ. ಯಾಕೆಂ
ದರೆ ದೇವರು ಅವರ ಕೂಡ ಮಾತನಾಡುವದನ್ನು
ನಿಲ್ಲಿಸಿರುವದರಿಂದ ಅವರು ಏನನ್ನೂ ಹೇಳುವ
ದಿಲ್ಲ.

### ಮೀಕನು ದೇವರ ನಂಬಿಗಸ್ತ ಪ್ರವಾದಿ

8 ಯೆಹೋವನ ಆತ್ಮನು ನನ್ನಲ್ಲಿ ಅಧಿಕಾರವನ್ನೂ,
ಒಳ್ಳೆಯತನವನ್ನೂ ಶಕ್ತಿಯನ್ನೂ ತುಂಬಿದ್ದಾನೆ.
ಯಾಕಂದರೆ ಯಾಕೋಬನ ಅಪರಾಧಗಳನ್ನು
ಅವನಿಗೆ ತಿಳಿಸುವುದಕ್ಕಾಗಿಯಷ್ಟೇ, ಇಸ್ರೇಲಿನ
ಪಾಪಗಳನ್ನು ಅವನಿಗೆ ಹೇಳುವುದಕ್ಕಾಗಿಯಷ್ಟೇ.’’

### ಇಸ್ರೇಲಿನ ನಾಯಕರು ಇದಕ್ಕೆ ಕಾರಣ

9 ಯಾಕೋಬಿನ ನಾಯಕರೇ, ಇಸ್ರೇಲಿನ ಪ್ರಧಾ
ನರೇ, ನನಗೆ ಕಿವಿಗೊಡಿರಿ! ಸರಿಯಾದ ಜೀವಿತ
ವನ್ನು ನೀವು ದ್ವೇಷಿಸುತ್ತೀರಿ. ನೆಟ್ಟಗಿರುವದನ್ನು
ಡೊಂಕಾಗಿ ನೀವು ಮಾಡುವಿರಿ.
10 ಜನರನ್ನು ಕೊಲೆ ಮಾಡಿ ಚೀಯೋನನ್ನು ಕಟ್ಟು
ತ್ತೀರಿ. ಜನರನ್ನು ಮೋಸಮಾಡಿ ಜೆರುಸಲೇಮನ್ನು
ಕಟ್ಟುತ್ತೀರಿ.
11 ಜೆರುಸಲೇಮಿನ ನ್ಯಾಯಾಧೀಶರು ಲಂಚ ತೆಗೆದು
ಕೊಂಡು ನ್ಯಾಯಕ್ಕೆ ವಿರುದ್ಧ ತೀರ್ಪುಕೊಡುವರು.
ಜನರಿಗೆ ಬೋಧಿಸುವ ಮೊದಲು ಜೆರುಸಲೇಮಿನ
ಯಾಜಕರು ಹಣವನ್ನು ವಸೂಲಿ ಮಾಡುವರು.
ಜನರು ತಮ್ಮ ಭವಿಷ್ಯದ ಬಗ್ಗೆ ಕೇಳಲು ಪ್ರವಾದಿ
ಗಳಿಗೆ ಮುಂಗಡವಾಗಿ ಹಣ ಕೊಡುವರು.
ಆಮೇಲೆ ಆ ನಾಯಕರು, ‘‘ಯೆಹೋವನು
ನಮ್ಮಲ್ಲಿ ವಾಸ ಮಾಡುತ್ತಿದ್ದಾನೆ. ಆದುದರಿಂದ
ನಮಗೆ ಕೆಟ್ಟದ್ದು ಏನೂ ಸಂಭವಿಸುವದಿಲ್ಲ’’ ಎಂದು
ಹೇಳುವರು.

---

**ಒಡೆದು ಹಾಕುವವನು:** ನಾಯಕ ಅಥವಾ ‘‘ಮೆಸ್ಸೀಯ.’’

12 ನಾಯಕರೇ, ನಿಮ್ಮಿಂದಾಗಿ ಚೀಯೋನ್ ನಾಶ
ವಾಗುವದು. ನೇಗಿಲಿನಿಂದ ಉತ್ತಲ್ಪಟ್ಟ ಹೊಲ
ದಂತೆ ಅದು ಇರುವದು. ಜೆರುಸಲೇಮ್ ಕಲ್ಲಿನ
ರಾಶಿಯಾಗುವದು. ಆಲಯದ ಗುಡ್ಡವು ಬರಿ
ದಾದ ಬೆಟ್ಟವಾಗುವುದು. ಅದರ ಮೇಲೆ ಪೊದೆ
ಗಳು ಹುಲುಸಾಗಿ ಬೆಳೆದುಕೊಳ್ಳುವವು.

### ಜೆರುಸಲೇಮಿನಿಂದ ಧರ್ಮಶಾಸ್ತ್ರ ಬರುವದು

4 ಅಂತ್ಯದ ದಿವಸಗಳಲ್ಲಿ ಯೆಹೋವನ ಆಲಯದ
ಪರ್ವತವು ಎಲ್ಲಾ ಪರ್ವತಗಳಿಗಿಂತಲೂ ಅತ್ಯುನ್ನ
ತವಾಗಿರುವುದು. ಅದು ಬೆಟ್ಟಗಳಿಗಿಂತಲೂ
ಉನ್ನತವಾಗಿರುವದು. ಅಲ್ಲಿಗೆ ಜನರು ಗುಂಪು
ಗುಂಪಾಗಿ ಹೋಗುವರು.
2 ಅನೇಕ ದೇಶಗಳಿಂದ ಜನರು ಅಲ್ಲಿಗೆ ಹೋಗು
ವರು. ‘‘ಬನ್ನಿರಿ, ನಾವು ಯೆಹೋವನ ಪರ್ವತಕ್ಕೆ
ಹೋಗೋಣ, ಯಾಕೋಬನ ದೇವರ ಆಲಯಕ್ಕೆ
ನಾವು ಹೋಗೋಣ. ಆಗ ದೇವರು ನಮಗೆ ಜೀವಿ
ತದ ಮಾರ್ಗವನ್ನು ಕಲಿಸುವನು. ಮತ್ತು ನಾವು
ಆತನನ್ನು ಅನುಸರಿಸುವೆವು’’ ಎಂದು ಹೇಳುವರು.
ದೇವರ ಉಪದೇಶವು, ಆತನ ಸಂದೇಶವು
ಚೀಯೋನ್ ಬೆಟ್ಟದಲ್ಲಿರುವ ಜೆರುಸಲೇಮಿನಲ್ಲಿ
ಪ್ರಾರಂಭವಾಗಿ ಪ್ರಪಂಚದಲ್ಲೆಲ್ಲಾ ಹಬ್ಬುತ್ತದೆ.
3 ಆಗ ಪ್ರಪಂಚದ ಎಲ್ಲಾ ಜನಾಂಗಗಳಿಗೆ
ಯೆಹೋವನೇ ನ್ಯಾಯಾಧೀಶನು. ದೂರ ದೇಶ
ದಲ್ಲಿರುವ ಅನೇಕ ಜನರ ಜಗಳಗಳನ್ನು ಆತನು
ನಿಲ್ಲಿಸುವನು. ಆ ಜನರು ಯುದ್ಧದ ಆಯುಧ
ಗಳನ್ನು ಉಪಯೋಗಿಸುವದನ್ನು ನಿಲ್ಲಿಸುವರು.
ತಮ್ಮ ಖಡ್ಗಗಳಿಂದ ನೇಗಿಲ ಗುಳಗಳನ್ನು
ತಯಾರಿಸುವರು. ಭರ್ಜಿಗಳಿಂದ ಕುಡುಗೋಲು
ಗಳನ್ನು ತಯಾರಿಸುವರು. ಜನರೊಳಗೆ ಪರಸ್ಪರ
ಯುದ್ಧ ಮಾಡುವದನ್ನು ನಿಲ್ಲಿಸುವರು. ಯುದ್ಧಕ್ಕೆ
ತರಬೇತಿ ಎಂದಿಗೂ ಮಾಡರು.
4 ಪ್ರತಿಯೊಬ್ಬನೂ ತನ್ನ ದ್ರಾಕ್ಷಾಲತೆಯ ನೆರಳಿನಲ್ಲಿ
ಕುಳಿತುಕೊಳ್ಳುವನು. ಅವರು ಅಂಜೂರದ ಮರ
ದಡಿಯಲ್ಲಿ ವಿಶ್ರಾಂತಿಯಲ್ಲಿರುವರು. ಯಾರೂ
ಅವರನ್ನು ಭಯಗೊಳಿಸುವದಿಲ್ಲ. ಯಾಕೆಂದರೆ
ಸರ್ವಶಕ್ತನಾದ ಯೆಹೋವನು ಹೀಗೆ ಆಗುವ
ದೆಂದು ಹೇಳಿದ್ದಾನೆ.
5 ಬೇರೆ ದೇಶಗಳವರು ತಮ್ಮ ದೇವರ ಹೆಸರಿನಲ್ಲಿ
ನಡೆಯುತ್ತಾರೆ. ನಾವಾದರೊ ನಮ್ಮ ದೇವರಾದ
ಯೆಹೋವನ ಹೆಸರನ್ನು ನಿತ್ಯಕಾಲಕ್ಕೂ
ಸ್ಮರಿಸುವೆವು.

### ರಾಜ್ಯವು ತಿರುಗಿ ತರಲ್ಪಡುವದು

6 ಯೆಹೋವನು ಹೇಳುವದೇನೆಂದರೆ, ‘‘ಜೆರುಸ
ಲೇಮು ಗಾಯಗೊಂಡು ಕುಂಟಾಗಿದೆ; ತಳ್ಳಲ್ಪ
ಟ್ಟಿದೆ; ಗಾಯಗೊಂಡು ಶಿಕ್ಷಿಸಲ್ಪಟ್ಟಿದೆ. ಆದರೆ
ನಾನು ಆಕೆಯನ್ನು ನನ್ನ ಬಳಿಗೆ ಬರಮಾಡುವೆನು.
7 ಆ ‘ಕುಂಟು’ ನಗರದ ಜನರೇ ಅಳಿದುಳಿದ ಜನ
ರಾಗುವರು. ಆ ಪಟ್ಟಣದ ಜನರನ್ನು ಬಲವಂತ
ದಿಂದ ಓಡಿಸಲಾಯಿತು. ಆದರೆ ನಾನು ಅವರನ್ನು
ಬಲಶಾಲಿಯಾದ ಜನಾಂಗವನ್ನಾಗಿ ಮಾಡು
ವೆನು.’’ ಯೆಹೋವನು ಅವರ ಅರಸನಾಗುವನು.
ಆತನು ಚೀಯೋನ್ ಪರ್ವತದಿಂದ ನಿತ್ಯಕಾಲಕ್ಕೂ
ಆಳುವನು.

8 ‘‘ಹಿಂಡುಗಳ ಗೋಪುರವೇ, ನಿನ್ನ ಸಮಯವು ಬರು
ವದು. ಚೀಯೋನಿನ ಒಫೆಲ್ ಗುಡ್ಡವೇ, ನಿನಗೆ
ತಿರುಗಿ ಅಧಿಕಾರ ದೊರಕುವುದು. ಹೌದು,
ಮೊದಲಿನಂತೆಯೇ ಜೆರುಸಲೇಮಿನಲ್ಲೇ ರಾಜ್ಯ
ವಿರುವುದು.’’

### ಬಾಬಿಲೋನಿಗೆ ಇಸ್ರೇಲರು ಯಾಕೆ ಹೋಗಬೇಕು?

9 ಯಾಕೆ ನೀನು ಗಟ್ಟಿಯಾಗಿ ಅರಚಿಕೊಳ್ಳುವೆ?
ನೀನು ನಿನ್ನ ನಾಯಕನನ್ನು ಕಳೆದುಕೊಂಡೆಯಾ?
ನಿನ್ನ ರಾಜನು ನಿನ್ನನ್ನು ಬಿಟ್ಟುಹೋದನೋ?
ನೀನು ಪ್ರಸವವೇದನೆಯನ್ನು ಅನುಭವಿಸುವ
ಹೆಂಗಸಿನಂತೆ ಶ್ರಮೆಯನ್ನು ಅನುಭವಿಸುತ್ತೀ.
10 ಚೀಯೋನಿನ ಕುಮಾರಿಯೇ, ನೋವನ್ನು ಅನು
ಭವಿಸು. ಮಗುವನ್ನು ಹೆರು. ನೀನು ಜೆರುಸ
ಲೇಮ್ ಪಟ್ಟಣದಿಂದ ಹೊರಗೆ ಹೋಗಿ ಹೊಲ
ದಲ್ಲಿ ವಾಸಿಸುವಿ. ನಾನು ಏನು ಹೇಳುವದೇ
ನೆಂದರೆ, ನೀನು ಬಾಬಿಲೋನಿಗೆ ಹೋಗುವಿ,
ಆದರೆ ಅಲ್ಲಿ ನೀನು ರಕ್ಷಿಸಲ್ಪಡುವಿ. ಯೆಹೋವನು
ಅಲ್ಲಿಗೆ ಬಂದು ನಿನ್ನನ್ನು ರಕ್ಷಿಸುವನು. ನಿನ್ನ ವೈರಿಗ
ಳಿಂದ ನಿನ್ನನ್ನು ಬಿಡುಗಡೆ ಮಾಡುವನು.

### ಯೆಹೋವನು ಜನಾಂಗಗಳನ್ನು ನಾಶಮಾಡುವನು

11 ಎಷ್ಟೋ ಜನಾಂಗಗಳು ನಿನ್ನ ವಿರುದ್ಧ ಯುದ್ಧಕ್ಕೆ
ಬಂದಿವೆ. ‘‘ಅಲ್ಲಿ ನೋಡಿ, ಚೀಯೋನ್ , ಬನ್ನಿ
ಆಕ್ರಮಣ ಮಾಡೋಣ’’ ಎಂದು ಹೇಳುವರು.
12 ಅವರು ತಮ್ಮ ಯೋಜನೆಯನ್ನು ಹಾಕುತ್ತಾರೆ.
ಆದರೆ ಯೆಹೋವನ ಯೋಜನೆಯೇನೆಂದು
ಅವರು ಅರಿಯರು. ಯೆಹೋವನು ತನ್ನ ಜನರನ್ನು
ಒಂದು ವಿಶೇಷ ಉದ್ದೇಶಕ್ಕಾಗಿ ಇಲ್ಲಿಗೆ ತಂದಿದ್ದಾನೆ.

ಆ ಜನರು ಕಣಕ್ಕೆ ಹಾಕಿದ ಸಿವುಡುಗಳಂತೆ ನಜ್ಜು
ಗುಜ್ಜಾಗುವರು.

### ಇಸ್ರೇಲ್ ಜಯಗೊಂಡು ಇತರ ಜನಾಂಗಗಳನ್ನು ನಾಶಮಾಡುವದು

13 ‘‘ಚೀಯೋನ್ ಕುಮಾರಿಯೇ, ಎದ್ದೇಳು, ಆ ಜನ
ರನ್ನು ಪುಡಿಮಾಡು! ನಾನು ನಿನ್ನನ್ನು ಬಲಶಾಲಿಯ
ನ್ನಾಗಿ ಮಾಡುವೆನು. ಕಬ್ಬಿಣದ ಕೊಂಬುಗಳಿರು
ವಂತೆ, ತಾಮ್ರದ ಗೊರಸುಗಳಿರುವಂತೆ ನಿನ್ನನ್ನು
ಮಾಡುವೆನು. ಎಷ್ಟೋ ಜನರನ್ನು ನೀನು ತುಂಡು
ತುಂಡು ಮಾಡುವಿ. ಅವರ ಐಶ್ವರ್ಯವನ್ನು ನೀನು
ಯೆಹೋವನಿಗೆ ಕೊಡುವಿ. ಅವರ ನಿಕ್ಷೇಪಗಳನ್ನು
ಇಡೀ ಭೂಮಿಗೆ ಒಡೆಯನಾಗಿರುವ ಯೆಹೋವ
ನಿಗೆ ಅರ್ಪಿಸುವಿ.’’

5 ಬಲಶಾಲಿಯಾದ ನಗರಿಯೇ, ನಿನ್ನ ಸೈನಿಕರನ್ನು
ಕೂಡಿಸು. ಅವರು ನಮ್ಮ ಮೇಲೆ ದಾಳಿ ಮಾಡಲು
ಸುತ್ತುವರಿದಿದ್ದಾರೆ. ಇಸ್ರೇಲಿನ ನ್ಯಾಯಧೀಶನ
ಕೆನ್ನೆಯ ಮೇಲೆ ಕೋಲಿನಿಂದ ಹೊಡೆಯುವರು.

### ಬೆತ್ಲೇಹೇಮಿನಲ್ಲಿ ಮೆಸ್ಸೀಯನು ಜನಿಸುವನು

2 ಎಫ್ರಾತದ ಬೆತ್ಲೇಹೇಮೇ, ನೀನು ಯೆಹೂದದ
ಪ್ರಾಂತ್ಯದಲ್ಲಿ ಅತಿ ಚಿಕ್ಕ ಊರು ಆಗಿರುವಿ. ನಿನ್ನಲ್ಲಿ
ರುವ ಕುಟುಂಬಗಳು ಸ್ವಲ್ಪ ಮಾತ್ರವೇ. ಆದರೆ
ಇಸ್ರೇಲನ್ನು ಆಳುವವನು ನನಗೋಸ್ಕರವಾಗಿ
ನಿನ್ನಿಂದ ಹೊರಡುವನು. ಆತನ ಪ್ರಾರಂಭವು
ಅನಾದಿಕಾಲದಿಂದಲೇ ಆಗಿದೆ.

3 ಸ್ತ್ರೀಯು ತನ್ನ ಮಗನನ್ನು ಹೆರುವ ತನಕ ಯೆಹೋ
ವನು ತನ್ನ ಜನರನ್ನು ತೊರೆದು ಬಿಡುವನು.
ಅನಂತರ ಉಳಿದ ಅವನ ಸಹೋದರರು ಇಸ್ರೇಲ್
ಜನರ ಬಳಿಗೆ ತಿರುಗಿ ಬರುವರು.

4 ಆಗ ಇಸ್ರೇಲರನ್ನು ಆಳುವಾತನು ಯೆಹೋವನ
ಶಕ್ತಿಯಲ್ಲಿಯೂ ತನ್ನ ದೇವರಾದ ಯೆಹೋವನ
ಹೆಸರಿನಲ್ಲಿಯೂ ನಿಂತು ತನ್ನ ಮಂದೆಗೆ ಆಹಾರವ
ನ್ನೀಯುವನು. ಆತನ ಮಹತ್ತು ಭೂಮಿಯ ಕಟ್ಟ
ಕಡೆಗೆ ಪ್ರಸರಿಸುವದರಿಂದ ಅವರು ಸಮಾಧಾನ
ದಿಂದ ವಾಸಿಸುವರು.

5 ಆಗ ಶಾಂತಿ ನೆಲೆಸುವದು. ಹೌದು, ಅಶ್ಯೂರದ
ಸೈನ್ಯವು ನಮ್ಮ ದೇಶಕ್ಕೆ ಬಂದು ನಮ್ಮ ಮಹಾ
ಕಟ್ಟಡಗಳನ್ನು ತುಳಿದು ಹಾಕುವರು. ಆದರೆ ಇಸ್ರೇ
ಲನ್ನು ಆಳುವಾತನು ಏಳು ಕುರುಬರನ್ನೂ ಎಂಟು
ನಾಯಕರನ್ನೂ ಆರಿಸುವನು.

6 ಅವರು ತಮ್ಮ ಖಡ್ಗಗಳನ್ನು ಉಪಯೋಗಿಸಿ
ಅಶ್ಯೂರದವರನ್ನು ಆಳುವರು. ಅವರು ನಿಮ್ರೋ
ದನ ದೇಶವನ್ನು ಆಳುವರು. ಕೈಯಲ್ಲಿ ಖಡ್ಗವನ್ನು
ಹಿಡಿದುಕೊಂಡು ಆ ಜನರನ್ನು ಆಳುವರು. ಆದರೆ
ಇಸ್ರೇಲಿನ ರಾಜನು ಅಶ್ಯೂರದವರಿಂದ ನಮ್ಮನ್ನು
ರಕ್ಷಿಸುವನು. ಅವರು ನಮ್ಮ ದೇಶದೊಳಕ್ಕೆ ಬಂದು
ನಮ್ಮ ಪ್ರದೇಶವನ್ನು ತುಳಿದು ಹಾಳು ಮಾಡುವಾಗ
ನಾವು ರಕ್ಷಿಸಲ್ಪಡುವೆವು.

7 ಆದರೆ ಜನಾಂಗಗಳಲ್ಲಿ ಚದರಿರುವ ಇಸ್ರೇಲಿನ
ಅಳಿದುಳಿದವರು ಯೆಹೋವನಿಂದ ಹೊರಡುವ
ಮಂಜಿನಂತಿರುವರು. ಅದು ಯಾರನ್ನೂ ಕಾಯು
ವದಿಲ್ಲ. ಅವರು ಹುಲ್ಲಿನ ಮೇಲೆ ಬಿದ್ದಿರುವ ಮಳೆ
ಯಂತಿರುವರು. ಆ ಮಳೆಯು ಯಾರನ್ನೂ
ಕಾಯುವದಿಲ್ಲ.

8 ‘‘ಆದರೆ ಜನಾಂಗಗಳಲ್ಲಿ ಚದರಿರುವ ಯಾಕೋಬ ವ
ವಂಶದ ಅಳಿದುಳಿದವರು, ಕಾಡಿನಲ್ಲಿರುವ
ಪ್ರಾಣಿಗಳಲ್ಲಿ ಸಿಂಹವು ಹೇಗೆ ಇರುವದೋ,
ಹಾಗೆಯೇ ಇರುವರು. ಕುರಿಗಳ ಹಿಂಡಿನ ಮಧ್ಯೆ
ಯಿರುವ ಪ್ರಾಯದ ಸಿಂಹದಂತಿರುವರು. ಅದು
ತನಗೆ ಇಷ್ಟ ಬಂದಂತೆ ತಿರುಗಾಡುವದು. ಅದು
ಒಂದು ಪ್ರಾಣಿಯನ್ನು ಹಿಡಿದರೆ ಅದನ್ನು ಬಿಡಿಸಲು
ಯಾರಿಂದಲೂ ಸಾಧ್ಯವಿಲ್ಲ. ಜನಶೇಷವು
ಅದರಂತಿರುವದು.

9 ನೀನು ನಿನ್ನ ವೈರಿಗಳ ಮೇಲೆ ಕೈಎತ್ತಿ ಅವರನ್ನು
ನಾಶಮಾಡುವೆ.

### ಜನರು ಯೆಹೋವನನ್ನು ಅವಲಂಬಿಸುವರು

10 ಯೆಹೋವನು ಹೇಳುವದೇನಂದರೆ, ‘‘ಆ
ಸಮಯದಲ್ಲಿ ನಿನ್ನ ಕುದುರೆಗಳನ್ನು ನಾನು ತೆಗೆದು
ಬಿಡುವೆನು. ನಿನ್ನ ರಥಗಳನ್ನು ನಾಶಮಾಡುವೆನು.

11 ನಿನ್ನ ದೇಶದಲ್ಲಿರುವ ಪಟ್ಟಣಗಳನ್ನು ಹಾಳು
ಮಾಡುವೆನು. ನಿನ್ನ ಕೋಟೆಗಳನ್ನೆಲ್ಲಾ ನಾಶ
ಮಾಡುವೆನು.

12 ನೀನು ಮಾಟಮಂತ್ರಗಳನ್ನು ಇನ್ನು ಮುಂದೆ
ಮಾಡದಿರುವಿ. ಭವಿಷ್ಯ ಮತ್ತು ಕಣಿ ಹೇಳುವ
ಜನರು ಇನ್ನು ಮುಂದೆ ನಿನ್ನಲ್ಲಿ ಇರರು.

13 ನಿನ್ನ ವಿಗ್ರಹಗಳನ್ನೂ ಕಲ್ಲು ಕಂಬಗಳನ್ನೂ ಒಡೆದು
ನಾಶಮಾಡುವೆನು. ನಿನ್ನ ಕೈಗಳು ಮಾಡಿದ
ವಸ್ತುಗಳನ್ನು ನೀನು ಪೂಜಿಸುವುದಿಲ್ಲ.

14 ನಾನು ನಿನ್ನ ಅಶೇರ ಸ್ತಂಭಗಳನ್ನು, ಸುಳ್ಳು
ದೇವರುಗಳನ್ನು ನಾಶಮಾಡುವೆನು.

15 ಕೆಲವು ಜನಾಂಗಗಳು ನನ್ನ ಮಾತಿಗೆ ಕಿವಿಗೊಡು
ವುದಿಲ್ಲ. ಆಗ ನಾನು ನನ್ನ ಕೋಪವನ್ನು
ಪ್ರದರ್ಶಿಸುವೆನು. ಆ ಅವಿಧೇಯರಿಗೆ ಮುಯ್ಯಿ
ತೀರಿಸುವೆನು.''

## ಯೆಹೋವನ ದೂರು

6 ಯೆಹೋವನು ಹೇಳುವದನ್ನು ಕೇಳಿರಿ: ನಿನ್ನ
ವ್ಯಾಜ್ಯವನ್ನು ಬೆಟ್ಟಗಳಿಗೆ ತಿಳಿಸು. ಗುಡ್ಡಗಳು ನಿನ್ನ
ಕಥೆಯನ್ನು ಕೇಳಲಿ.
2 ಯೆಹೋವನಿಗೆ ತನ್ನ ಜನರ ವಿರುದ್ಧವಾಗಿ ವ್ಯಾಜ್ಯ
ವಿದೆ. ಪರ್ವತಗಳೇ, ಭೂಮಿಯ ಅಸ್ತಿವಾರವೇ,
ಯೆಹೋವನ ದೂರುಗಳನ್ನು ಕೇಳಿರಿ. ಇಸ್ರೇಲ್
ತಪ್ಪಿತಸ್ತನೆಂದು ಆತನು ಧೃಢಪಡಿಸುವನು.
3 ಯೆಹೋವನು ಹೇಳುವದೇನಂದರೆ, ''ನನ್ನ
ಜನರೇ, ನಾನು ಮಾಡಿದ್ದೇನು ತಿಳಿಸಿರಿ. ನಿನಗೆ
ವಿರೋಧವಾಗಿ ನಾನು ಏನಾದರೂ ಮಾಡಿ
ದ್ದೇನೋ? ನಿನಗೆ ಜೀವಿಸಲು ಕಷ್ಟವಾಗುವಂತೆ
ಮಾಡಿದ್ದೇನೋ?
4 ನಾನು ಮಾಡಿದ್ದನ್ನು ನಿಮಗೆ ಹೇಳುತ್ತೇನೆ, ನಾನು
ನಿಮ್ಮ ಬಳಿಗೆ ಮೋಶೆ, ಆರೋನ್ ಮತ್ತು ಮಿರ್ಯಾ
ಮಳನ್ನು ಕಳುಹಿಸಿದೆನು. ನಾನು ಈಜಿಪ್ಟ್ ದೇಶ
ದಿಂದ ನಿಮ್ಮನ್ನು ಕರೆತಂದೆನು. ಗುಲಾಮತನ
ದಿಂದ ನಿಮ್ಮನ್ನು ಬಿಡಿಸಿ ಸ್ವತಂತ್ರರನ್ನಾಗಿ
ಮಾಡಿದೆನು.
5 ನನ್ನ ಜನರೇ, ಮೋವಾಬ್ಯರ ಅರಸನಾದ ಬಾಲಾ
ಕನ ದುಷ್ಟ ಯೋಜನೆಯನ್ನು ನೆನಪುಮಾಡಿರಿ.
ಬೆಯೋರನ ಮಗನಾದ ಬಿಳಾಮನು ಬಾಲಾಕ
ನಿಗೆ ಏನು ಹೇಳಿದನೆಂದು ಜ್ಞಾಪಕ ಮಾಡಿರಿ.
ಶಿಟ್ಟೀಮಿನಿಂದ ಗಿಲ್ಗಾಲಿನ ತನಕ ನಡೆದ ಘಟನೆ
ಗಳನ್ನು ನಿಮ್ಮ ನೆನಪಿಗೆ ತಂದುಕೊಳ್ಳಿರಿ. ಅವೆಲ್ಲ
ವನ್ನು ನೀವು ನೆನಪು ಮಾಡಿದರೆ ಯೆಹೋವನು
ನೀತಿವಂತನು ಎಂದು ನಿಮಗೆ ಗೊತ್ತಾಗುವದು.''

## ನಮ್ಮಿಂದ ದೇವರು ಏನನ್ನು ಅಪೇಕ್ಷಿಸುತ್ತಾನೆ?

6 ನಾನು ದೇವರಾದ ಯೆಹೋವನನ್ನು ಸಂಧಿಸಲು
ಬರುವಾಗ ಏನನ್ನು ತೆಗೆದುಕೊಂಡು ಬರಲಿ? ಪರ
ಲೋಕದ ದೇವರಿಗೆ ನಾನು ಅಡ್ಡಬಿದ್ದು ಆರಾಧಿಸು
ವಾಗ ಏನು ಮಾಡಲಿ? ನಾನು ಕರ್ತನ ಬಳಿಗೆ
ಬರುವಾಗ ಸರ್ವಾಂಗ ಹೋಮದೊಡನೆ ಒಂದು
ವರುಷದ ಕರುವನ್ನು ತೆಗೆದುಕೊಂಡು ಬರಲೋ?
7 ದೇವರಾದ ಯೆಹೋವನು ಒಂದು ಸಾವಿರ ಟಗರು
ಹತ್ತು ಸಾವಿರ ಎಣ್ಣೆಯ ಹೊಳೆಗಳಲ್ಲಿ
ಸಂತೋಷಿಸುವನೋ? ನಾನು ಮಾಡಿದ ತಪ್ಪಿನ
ಪರಿಹಾರಕ್ಕಾಗಿ ನನ್ನ ಚೊಚ್ಚಲ ಮಗನನ್ನು
ಸಮರ್ಪಿಸಲೋ? ನನ್ನ ಶರೀರದಿಂದ ಬಂದ
ಮಗನನ್ನು ನನ್ನ ಪಾಪಗಳಿಗಾಗಿ ಸಮರ್ಪಿಸಲೋ?

8 ಮನುಷ್ಯನೇ, ಒಳ್ಳೆಯದು ಏನೆಂದು ಯೆಹೋ
ವನು ನಿನಗೆ ತಿಳಿಸಿದ್ದಾನೆ. ಯೆಹೋವನು ನಿನ್ನಿಂದ
ಅಪೇಕ್ಷಿಸುವದೇನೆಂದರೆ, ಇತರರಿಗೆ ನೀನು
ಅನ್ಯಾಯ ಮಾಡದಿರು. ದಯೆ ಮತ್ತು ನಂಬಿಗಸ್ತಿಕೆ
ಗಳನ್ನು ಪ್ರೀತಿಸು. ದೀನತೆಯಿಂದ ನಿನ್ನ ದೇವ
ರೊಂದಿಗೆ ಜೀವಿಸು. ನಿನ್ನ ಕಾಣಿಕೆಗಳಿಂದ
ಆತನನ್ನು ಮೆಚ್ಚಿಸಲು ಪ್ರಯತ್ನಿಸದಿರು.

## ಇಸ್ರೇಲರು ಏನನ್ನು ಮಾಡುತ್ತಿದ್ದರು?

9 ಯೆಹೋವನ ಸ್ವರವು ಪಟ್ಟಣದಲ್ಲಿ ಗಟ್ಟಿಯಾಗಿ
ಕೇಳಿಸುತ್ತದೆ. ಬುದ್ಧಿವಂತನು ಯೆಹೋವನ ನಾಮ
ವನ್ನು ಗೌರವಿಸುವನು. ಆದುದರಿಂದ ಶಿಕ್ಷೆಯ
ಬೆತ್ತದ ಕಡೆಗೆ ಲಕ್ಷ್ಯವಿಡು. ಆ ಬೆತ್ತವನ್ನು ಹಿಡು
ಕೊಂಡವನನ್ನೂ ಗೌರವಿಸು.
10 ಕದ್ದುಕೊಂಡ ಭಂಡಾರಗಳನ್ನು ದುಷ್ಟರು ಇನ್ನೂ
ಗುಪ್ತವಾಗಿಡುವರೋ? ಕೆಟ್ಟ ಜನರು ತಮ್ಮ ಚಿಕ್ಕ
ಅಳತೆಯಿಂದ ಜನರನ್ನು ಇನ್ನೂ ಮೋಸಪಡಿಸು
ವರೋ? ಹೌದು, ಅವೆಲ್ಲವೂ ನಡಿಯುತ್ತಲಿದೆ.
11 ಇನ್ನೂ ಮೋಸದ ಅಳತೆ ಪ್ರಮಾಣಗಳನ್ನು ಉಪ
ಯೋಗಿಸುವ ದುಷ್ಟರನ್ನು ನಾನು ಕ್ಷಮಿಸ
ಬೇಕೋ? ಚೀಲದೊಳಗೆ ಭಾರ ತುಂಬಿಸಿ
ಮೋಸದ ಪ್ರಮಾಣದಲ್ಲಿ ವ್ಯಾಪಾರ ಮಾಡುವವ
ರನ್ನು ನಾನು ಕ್ಷಮಿಸಬೇಕೋ?
12 ಪಟ್ಟಣದ ಧನಿಕರು ಕ್ರೂರವಾದ ಮತ್ತು ದುಷ್ಟತ್ವದ
ಕಾರ್ಯಗಳನ್ನು ಇನ್ನೂ ಮಾಡುತ್ತಿದ್ದಾರೆ. ಆ
ಪಟ್ಟಣದಲ್ಲಿರುವ ಜನರು ಇನ್ನೂ ಸುಳ್ಳು ಹೇಳು
ತ್ತಾರೆ. ಹೌದು, ಆ ಜನರು ತಮ್ಮ ಸುಳ್ಳನ್ನು
ಪ್ರದರ್ಶಿಸುತ್ತಾರೆ.
13 ಆದುದರಿಂದ ನಾನು ನಿಮ್ಮನ್ನು ಶಿಕ್ಷಿಸಲು
ಪ್ರಾರಂಭಿಸಿದೆನು. ನಿಮ್ಮ ಪಾಪಗಳ ದೆಸೆಯಿಂದ
ನಿಮ್ಮನ್ನುನಾಶಮಾಡುವೆನು.
14 ನೀವು ಉಣ್ಣುವಿರಿ ಆದರೆ ನಿಮ್ಮ ಹೊಟ್ಟೆತುಂಬದು.
ನೀವು ಹೊಟ್ಟೆಗಿಲ್ಲದವರಂತೆ ಹಸಿವಿನಿಂದಲೇ
ಇರುವಿರಿ. ನೀವು ಜನರನ್ನು ಸುರಕ್ಷಿತ ಸ್ಥಳಕ್ಕೆ ತರಲು
ಪ್ರಯತ್ನಿಸುವಿರಿ. ಆದರೆ ನೀವು ರಕ್ಷಿಸಿದ ಜನರನ್ನು
ಖಡ್ಗಧಾರಿಗಳು ಕೊಂದುಬಿಡುವರು. ಜನರು
ನಿಮ್ಮನ್ನು ಹಿಡಿಯುವರು.

15 ನೀವು ಬೀಜ ಬಿತ್ತುವಿರಿ, ಆದರೆ ಪೈರು ಕೊಯ್ಯುವು
ದಿಲ್ಲ. ಆಲೀವ್ ಕಾಯಿಗಳನ್ನು ಗಾಣದಲ್ಲಿ ಹಾಕಿ
ಎಣ್ಣೆ ತೆಗೆಯುವಿರಿ. ಆದರೆ ನಿಮಗೆ ಎಣ್ಣೆಯೇ
ಸಿಗುವದಿಲ್ಲ. ನೀವು ದ್ರಾಕ್ಷೆ ಹಣ್ಣುಗಳನ್ನು ತೊಟ್ಟಿ
ಯಲ್ಲಿ ಹಾಕಿ ತುಳಿಯುವಿರಿ, ಆದರೆ ಕುಡಿಯಲು
ದ್ರಾಕ್ಷಾರಸವೇ ಸಿಗುವದಿಲ್ಲ.
16 ಯಾಕೆ ಹೀಗೆ? ಯಾಕಂದರೆ ನೀವು ಒಮ್ರಿಯ
ಆಜ್ಞೆಯನ್ನು ಪರಿಪಾಲಿಸಿದಿರಿ. ಅಹಾಬನ ಮನೆಯ
ವರು ಮಾಡುತ್ತಿದ್ದ ದುಷ್ಕೃತ್ಯಗಳನ್ನು ನೀವು ಮಾಡು
ತ್ತೀರಿ. ನೀವು ಅವರ ಬೋಧನೆಯನ್ನು ಅನುಸರಿ
ಸುತ್ತೀರಿ. ಆದ್ದರಿಂದ ನೀವು ನಾಶವಾಗುವಂತೆ
ಮಾಡುವೆನು. ನಿಮ್ಮ ಕೆಡವಲ್ಪಟ್ಟ ನಗರವನ್ನು
ನೋಡಿದ ಜನರು ಆಶ್ಚರ್ಯದಿಂದ ಸಿಳ್ಳು
ಹಾಕುವರು. ಆಗ ಬೇರೆ ಜನಾಂಗದವರು ನಿಮ್ಮ
ಮೇಲೆ ಹಾಕಿದ ಅವಮಾನವನ್ನು ನೀವು ಸಹಿಸಿ
ಕೊಳ್ಳುವಿರಿ.

### ಜನರ ದುಷ್ಟತನವನ್ನು ನೋಡಿ ಮೀಕನಿಗಾದ ಬೇಸರ

7 ನಾನು ಬೇಸರಗೊಂಡಿದ್ದೇನೆ. ಯಾಕೆಂದರೆ
ನಾನು ಕೂಡಿಸಲ್ಪಟ್ಟ ಹಣ್ಣಿನಂತಿದ್ದೇನೆ;
ಕೊಯಿದು ಶೇಖರಿಸಿದ ದ್ರಾಕ್ಷೆ ಹಣ್ಣಿನಂತಿದ್ದೇನೆ.
ತಿನ್ನಲು ದ್ರಾಕ್ಷೆಹಣ್ಣು ಏನೂ ಉಳಿಯಲಿಲ್ಲ. ನನಗೆ
ಪ್ರಿಯವಾದ ಫಲಕಾಲದ ಆರಂಭದಲ್ಲೇ ಫಲಿಸುವ
ಅಂಜೂರದ ಹಣ್ಣು ಸಿಕ್ಕಲೇ ಇಲ್ಲ.
2 ನಾನು ಹೇಳುವದೇನೆಂದರೆ ನಂಬಿಗಸ್ತ ಜನರೆಲ್ಲಾ
ಹೋಗಿ ಬಿಟ್ಟರು. ಈ ದೇಶದಲ್ಲಿ ಒಳ್ಳೇ ಜನರು
ಯಾರೂ ಉಳಿಯಲಿಲ್ಲ. ಪ್ರತಿಯೊಬ್ಬನೂ
ಇನ್ನೊಬ್ಬನನ್ನು ಕೊಲ್ಲಲು ಕಾಯುತ್ತಿದ್ದಾನೆ. ಪ್ರತಿ
ಯೊಬ್ಬನೂ ತನ್ನ ಸೋದರನನ್ನು ಸಿಕ್ಕಿಸಿಹಾಕಲು
ಕಾಯುತ್ತಿದ್ದಾನೆ.

3 ‘‘ಕೆಟ್ಟದ್ದನ್ನು ಎರಡೂ ಕೈಗಳಿಂದ ನಡಿಸಲು ಜನರು
ನಿಪುಣರಾಗಿದ್ದಾರೆ. ಅಧಿಕಾರಿಗಳು ಲಂಚಕೇಳು
ತ್ತಾರೆ. ನ್ಯಾಯಾಧೀಶರು ತಮ್ಮ ತೀರ್ಪು ಬದಲಾ
ಯಿಸಲು ಹಣ ಕೇಳುತ್ತಿದ್ದಾರೆ. ಪ್ರಮುಖ ನಾಯ
ಕರು ನ್ಯಾಯವಾದ ಮತ್ತು ಜನರಿಗೆ ಹಿತವಾದ
ತೀರ್ಮಾನವನ್ನು ಮಾಡುವದಿಲ್ಲ. ತಮ್ಮ ಇಷ್ಟ
ಪ್ರಕಾರ ಅವರು ಮಾಡುತ್ತಿದ್ದಾರೆ.
4 ಅವರಲ್ಲಿರುವ ಉತ್ತಮರೂ ಸಹ ಮುಳ್ಳಿನ ಪೊದೆ
ಯಂತಿದ್ದಾರೆ. ಅವರಲ್ಲಿರುವ ಉತ್ತಮರೂ ಸಹ
ಡೊಂಕು ಡೊಂಕಾಗಿರುವ ಮುಳ್ಳು ಪೊದೆ
ಗಿಂತಲೂ ಡೊಂಕಾಗಿದ್ದಾರೆ.

### ಶಿಕ್ಷೆಯ ದಿನ ಬರುತ್ತಿದೆ

ನಿನ್ನ ಪ್ರವಾದಿಗಳು ಈ ದಿನವು ಬರುತ್ತಿದೆ ಎಂದು
ಹೇಳುತ್ತಿದ್ದಾರೆ. ನಿನ್ನ ಪ್ರವಾದಿಗಳ ದಿವಸವು
ಬಂದದೆ. ಈಗ ನೀನು ಶಿಕ್ಷಿಸಲ್ಪಡುವಿ. ನೀನೀಗ
ಗಲಿಬಿಲಿಗೆ ಒಳಗಾಗುವಿ!
5 ನಿನ್ನ ನೆರೆಯವನ ಮೇಲೆ ನಂಬಿಕೆ ಇಡಬೇಡ! ನಿನ್ನ
ಸ್ನೇಹಿತನ ಮೇಲೆ ಭರವಸವಿಡಬೇಡ! ನಿನ್ನ ಹೆಂಡತಿ
ಯೊಂದಿಗೂ ನಿನ್ನ ಮನಸ್ಸಿನಲ್ಲಿರುವ ವಿಷಯವನ್ನು
ತಿಳಿಸಬೇಡ.
6 ಒಬ್ಬನ ವೈರಿಯು ಅವನ ಮನೆಯವರೇ ಆಗಿರು
ತ್ತಾರೆ. ಮಗನು ತಂದೆಗೆ ಗೌರವವನ್ನು ಕೊಡುವ
ದಿಲ್ಲ. ಮಗಳು ತಾಯಿಗೆ ವಿರುದ್ಧವಾಗಿ ನಡೆ
ಯುವಳು. ಸೊಸೆಯು ಅತ್ತೆಗೆ ವಿರುದ್ಧವಾಗಿ
ನಡೆಯುವಳು.

### ಯೆಹೋವನೇ ರಕ್ಷಕನು

7 ನಾನು ಸಹಾಯಕ್ಕಾಗಿ ಯೆಹೋವನ ಕಡೆಗೆ
ನೋಡುತ್ತೇನೆ. ದೇವರ ರಕ್ಷಣೆಗಾಗಿ ನಿರೀಕ್ಷಿಸು
ತ್ತೇನೆ. ನನ್ನ ದೇವರು ನನಗೆ ಕಿವಿಗೊಡುತ್ತಾನೆ.
8 ನಾನು ಬಿದ್ದಿದ್ದೇನೆ, ಆದರೆ ವೈರಿಯೇ, ನನ್ನನ್ನು
ನೋಡಿ ನಗಾಡಬೇಡ! ನಾನು ತಿರುಗಿ ಏಳುತ್ತೇನೆ;
ನಾನೀಗ ಅಂಧಕಾರದಲ್ಲಿ ಕುಳಿತುಕೊಳ್ಳುತ್ತೇನೆ.
ಆದರೆ ಯೆಹೋವನು ನನ್ನ ಬೆಳಕಾಗಿರುತ್ತಾನೆ.

### ಯೆಹೋವನು ಕ್ಷಮಿಸುತ್ತಾನೆ

9 ನಾನು ಯೆಹೋವನಿಗೆ ವಿರುದ್ಧವಾಗಿ ಪಾಪ ಮಾಡಿ
ದ್ದೇನೆ. ಆದುದರಿಂದ ಆತನು ನನ್ನ ಮೇಲೆ
ಕೋಪಿಸಿಕೊಂಡಿದ್ದಾನೆ. ಆದರೆ ನನ್ನ ಪರವಾಗಿ
ಆತನು ವಾದಿಸುತ್ತಾನೆ. ನನಗೆ ಒಳ್ಳೇಯದನ್ನೇ
ಆತನು ಮಾಡುತ್ತಾನೆ. ಆ ಬಳಿಕ ನನ್ನನ್ನು ಹೊರಗೆ
ಬೆಳಕಿಗೆ ತರುವನು. ಆತನು ನೀತಿವಂತನೆಂಬುದು
ಆಗ ನನಗೆ ತಿಳಿಯುವುದು.

10 ‘‘ನಿನ್ನ ದೇವರಾದ ಯೆಹೋವನು ಎಲ್ಲಿ?’’ ಎಂದು
ಕೇಳಿದ ವೈರಿಗಳು ಇದನ್ನು ನೋಡಿ, ನಾಚಿಕೆ
ಗೊಳ್ಳುವರು. ಆಗ ನಾನು ಅವರ ವಿಷಯವಾಗಿ
ನಗಾಡುವೆನು; ರಸ್ತೆಯ ಮಣ್ಣಿನ ಮೇಲೆ ನಡೆಯು
ವಂತೆ ಜನರು ಅವರ ಮೇಲೆ ನಡಿಯುವರು.

### ಯೆಹೂದ್ಯರು ಮರಳಿ ಬರುವರು

11 ನಿನ್ನ ನಗರದ ಗೋಡೆಗಳು ತಿರುಗಿ ಕಟ್ಟಲ್ಪಡುವ
ದಿನಗಳು ಬರುತ್ತವೆ. ಆಗ ದೇಶವು ಬೆಳೆಯುವುದು.

12 ನಿನ್ನ ಜನರು ದೇಶಕ್ಕೆ ಹಿಂತಿರುಗುವರು. ಅವರು ಅಶ್ಶೂರದಿಂದ ಈಜಿಪ್ಟ್ ನಗರಗಳಿಂದಲೂ ಹಿಂದೆ ಬರುವರು, ನಿನ್ನ ಜನರು ಈಜಿಪ್ಟಿನಿಂದಲೂ ಯೂಫ್ರೇಟೀಸ್ ನದಿಯ ಆಚೆಕಡೆಯಿಂದ ಬರುವರು. ಪಶ್ಚಿಮದ ಸಮುದ್ರದ ಕಡೆಯಿಂದ ಬರುವರು. ಪೂರ್ವದ ಪರ್ವತಗಳ ಕಡೆಯಿಂದ ಬರುವರು.
13 ದೇಶದಲ್ಲಿ ವಾಸಿಸಿದ್ದ ಜನರಿಂದಲೂ ಅವರು ಮಾಡಿದ್ದ ಕೆಲಸಗಳಿಂದಲೂ ದೇಶವು ಹಾಳಾಗಿ ಹೋಗಿತ್ತು.

14 ‘‘ಆದುದರಿಂದ ನಿನ್ನ ಜನರನ್ನು ಕಬ್ಬಿಣದ ಕೋಲಿನಿಂದ ಆಳು, ನಿನಗೆ ಸೇರಿದ ಜನರ ಹಿಂಡುಗಳನ್ನು ಆಳು. ಆ ಗುಂಪು ಅಡವಿಯಲ್ಲಿ ತಾನಾಗಿಯೇ ವಾಸಿಸುತ್ತದೆ; ಕರ್ಮೆಲ್ ಬೆಟ್ಟದಲ್ಲಿಯೂ ವಾಸಿಸುತ್ತದೆ. ಹಿಂದಿನ ಕಾಲದಲ್ಲಿ ಮಾಡಿದಂತೆ ಆ ಗುಂಪು ಬಾಷಾನ್ ಮತ್ತು ಗಿಲ್ಯಾದ್ ಪ್ರಾಂತ್ಯದಲ್ಲಿ ವಾಸಿಸುತ್ತದೆ.

### ಇಸ್ರೇಲ್ ತನ್ನ ವೈರಿಗಳನ್ನು ಸೋಲಿಸುವುದು

15 ನಿಮ್ಮನ್ನು ಈಜಿಪ್ಟಿನಿಂದ ಬರಮಾಡಿದಾಗ ಅನೇಕ ಅದ್ಭುತ ಕಾರ್ಯಗಳನ್ನು ಮಾಡಿದೆನು. ಇನ್ನೂ ಅನೇಕ ಅದ್ಭುತಗಳನ್ನು ನೀವು ನೋಡುವಂತೆ ಮಾಡುವೆನು.
16 ಜನಾಂಗಗಳು ಆ ಅದ್ಭುತವನ್ನು ನೋಡಿ ನಾಚಿಕೆಗೊಳ್ಳುವರು. ನನ್ನ ಶಕ್ತಿಯ ಎದುರು ಅವರ ಬಲವು ಏನೂ ಅಲ್ಲವೆಂದು ತಿಳಿಯುವರು. ಅವರು ಆಶ್ಚರ್ಯದಿಂದ ಚಕಿತರಾಗಿ ತಮ್ಮ ಬಾಯಿಗಳ ಮೇಲೆ ಕೈಗಳನ್ನಿಡುವರು. ತಮ್ಮ ಕಿವಿಗಳನ್ನು ಮುಚ್ಚಿ ವಾರ್ತೆ ಕೇಳಲು ನಿರಾಕರಿಸುವರು.
17 ಧೂಳಿನ ಮೇಲೆ ಹಾವಿನಂತೆ ಅವರು ಹರಿದಾಡುವರು. ಭಯದಿಂದ ನಡುಗುವರು. ನೆಲದ ಮೇಲಿನ ಬಿಲಗಳಿಂದ ಹರಿದುಕೊಂಡು ಬರುವ ಹುಳುಗಳಂತಿರುವರು. ನಮ್ಮ ದೇವರಾದ ಯೆಹೋವನ ಬಳಿಗೆ ಬಂದು ನಿಮ್ಮನ್ನು ಭಯದಿಂದ ನೋಡುವರು.

### ಯೆಹೋವನಿಗೆ ಸ್ತೋತ್ರ

18 ನಿನ್ನ ಹಾಗೆ ಬೇರೆ ಯಾವ ದೇವರು ಇಲ್ಲ. ಪಾಪದಲ್ಲಿ ಬಿದ್ದವರನ್ನು ನೀನು ಕ್ಷಮಿಸುತ್ತೀ. ನಿನ್ನ ಜನಶೇಷವನ್ನು ಮನ್ನಿಸುವಿ. ನೀನು ನಿತ್ಯಕ್ಕೂ ಕೋಪಿಸುವದಿಲ್ಲ. ಯಾಕೆಂದರೆ ದಯೆತೋರಿಸುವದರಲ್ಲಿ ನೀನು ಸಂತೋಷಿಸುತ್ತೀ.
19 ಯೆಹೋವನೇ, ನಮ್ಮನ್ನು ತಿರುಗಿ ಸಂತೈಸು. ನಮ್ಮ ಪಾಪಗಳನ್ನು ನಮ್ಮಿಂದ ನಿವಾರಿಸು. ನಮ್ಮೆಲ್ಲಾ ಪಾಪಗಳನ್ನು ಆಳವಾದ ಸಮುದ್ರದ ತಳದಲ್ಲಿ ಹಾಕು.
20 ನೀನು ಯಾಕೋಬನಿಗೆ ನಂಬಿಗಸ್ತನಾಗುವಿ. ನೀನು ಅಬ್ರಹಾಮನ ಮೇಲೆ ದಯೆತೋರಿಸಿ, ನಂಬಿಗಸ್ತನಾಗುವಿ. ಇದನ್ನು ನೀನು ಬಹಳ ಕಾಲದ ಹಿಂದೆಯೇ ನಮ್ಮ ಪೂರ್ವಿಕರಿಗೆ ವಾಗ್ದಾನ ಮಾಡಿರುವೆ.

# ನಹೂಮ

1 ಎಲ್ಕೋಷ್ ಎಂಬ ಊರಿನವನಾದ ನಹೂಮನಿಗೆ ಆದ ದೇವದರ್ಶನದ ಪುಸ್ತಕ. ನಿನೆವೆ ಪಟ್ಟಣದ ವಿಷಯವಾಗಿ ದುಃಖಕರವಾದ ಸಂದೇಶ.

### ನಿನೆವೆಯ ಮೇಲೆ ಯೆಹೋವನು ಕೋಪಗೊಂಡಿದ್ದಾನೆ

2 ಯೆಹೋವನು ಸ್ವಾಭಿಮಾನವುಳ್ಳ ದೇವರಾಗಿದ್ದಾನೆ. ಆತನು ಪಾಪಿಗಳ ಮೇಲೆ ಸೇಡನ್ನು ತೀರಿಸುವ ದೇವರು. ಆತನು ಬಹಳವಾಗಿ ಕೋಪಗೊಂಡಿದ್ದಾನೆ. ಯೆಹೋವನು ಪಾಪಿಗಳನ್ನು ಶಿಕ್ಷಿಸುವ ದೇವರು. ಆತನು ವೈರಿಗಳನ್ನು ಶಿಕ್ಷಿಸುವನು. ಆತನ ವೈರಿಗಳ ಮೇಲೆ ಕೋಪವು ಸದಾಕಾಲವಿರುವುದು.

3 ‘‘ಯೆಹೋವನು ತಾಳ್ಮೆಯುಳ್ಳ ದೇವರು. ಮತ್ತು ಬಲಿಷ್ಠನಾದ ದೇವರಾಗಿದ್ದಾನೆ! ಪಾಪಿಗಳನ್ನು ಆತನು ಶಿಕ್ಷಿಸುವನು. ಆತನಿಂದ ಅವರು ತಪ್ಪಿಸಿಕೊಳ್ಳಲಾರರು. ದುಷ್ಟ ಜನರನ್ನು ಶಿಕ್ಷಿಸಲು ಯೆಹೋವನು ಬರುವನು. ಆತನು ತನ್ನ ಸಾಮರ್ಥ್ಯವನ್ನು ಬಿರುಗಾಳಿಯಲ್ಲಿಯೂ ಸುಂಟರ ಗಾಳಿಯಲ್ಲಿಯೂ ತೋರ್ಪಡಿಸುವನು. ಮನುಷ್ಯನು ನೆಲದ ಧೂಳಿನ ಮೇಲೆ ನಡೆಯುತ್ತಾರೆ, ಯೆಹೋವನಾದರೋ ಮೋಡಗಳ ಮೇಲೆ ನಡೆಯುತ್ತಾನೆ.

4 ಯೆಹೋವನು ಸಮುದ್ರಕ್ಕೆ ಗದರಿಸಿದಾಗ ಅದು ಒಣಗಿಹೋಗುವುದು. ಆತನು ಎಲ್ಲಾ ನದಿಗಳನ್ನು ಬತ್ತಿಸಿ ಬಿಡುವನು. ಕರ್ಮೆಲ್ ಮತ್ತು ಬಾಷಾನಿನ ಫಲವತ್ತಾದ ನೆಲಗಳು ಒಣಗಿ ಪಾಳು ಬೀಳುವವು. ಲೆಬನೋನಿನ ಪುಷ್ಪವು ಬಾಡಿ ಹೋಗುವದು.

5 ಯೆಹೋವನು ಬರುತ್ತಾನೆ. ಪರ್ವತಗಳು ಭಯದಿಂದ ನಡುಗುವದು. ಬೆಟ್ಟಗಳು ಕರಗಿ ಹೋಗುವದು. ಯೆಹೋವನು ಬರುತ್ತಾನೆ. ಮತ್ತು ಭೂಮಿಯು ಭಯದಿಂದ ನಡುಗುವುದು. ಇಡೀ ಪ್ರಪಂಚ ಮತ್ತು ಅದರಲ್ಲಿರುವ ಜನರೆಲ್ಲಾ ಭಯದಿಂದ ನಡುಗುವರು.

6 ಯೆಹೋವನು ಮಹಾ ರೌದ್ರಕ್ಕೆದುರಾಗಿ ಯಾರೂ ನಿಲ್ಲಲಾರರು. ಯಾರೂ ಆ ಮಹಾ ಕೋಪವನ್ನು ಸಹಿಸಲು ಸಾಧ್ಯವಿಲ್ಲ. ಆತನ ಕೋಪವು ಬೆಂಕಿಯಂತೆ ದಹಿಸುವದು. ಆತನು ಬರುವಾಗ ಬಂಡೆಯು ಪುಡಿ ಯಾಗುವುದು.

7 ಯೆಹೋವನು ಒಳ್ಳೆಯವನು. ಕಷ್ಟದ ಸಮಯದಲ್ಲಿ ಆತನು ಆಶ್ರಯಸ್ಥಾನ. ಆತನ ಮೇಲೆ ಭರವಸವಿಡುವವರನ್ನು ಸಂರಕ್ಷಿಸುತ್ತಾನೆ.

8 ಆದರೆ ಆತನು ತನ್ನ ವೈರಿಗಳನ್ನು ಪೂರ್ತಿಯಾಗಿ ನಾಶಮಾಡುತ್ತಾನೆ. ತೆರೆಯಂತೆ ಅವರನ್ನು ಕೊಚ್ಚಿಕೊಂಡು ಹೋಗುತ್ತಾನೆ. ಕತ್ತಲೆಯ ಕಡೆಗೆ ವೈರಿಗಳನ್ನು ಅಟ್ಟಿ ಬಿಡುವನು.

9 ಯೆಹೋವನಿಗೆ ವಿರುದ್ಧವಾಗಿ ಏಕೆ ಯೋಜನೆ ಹಾಕುತ್ತೀರಿ? ನೀವು ಯಾವ ಕುಯುಕ್ತಿಯನ್ನೂ ಮಾಡದ ಹಾಗೆ ಆತನು ನಿಮ್ಮನ್ನು ಸಂಪೂರ್ಣವಾಗಿ ನಾಶಮಾಡುತ್ತಾನೆ.

10 ಮಡಕೆಯ ಅಡಿಯಲ್ಲಿ ಉರಿಯುವ ಮುಳ್ಳು ಕಡ್ಡಿಗಳಂತೆ ನೀವು ಸಂಪೂರ್ಣವಾಗಿ ನಾಶವಾಗುವಿರಿ. ಜಂಬುಹುಲ್ಲಿನಂತೆ ನೀವು ಸುಟ್ಟು ಭಸ್ಮವಾಗುವಿರಿ.

11 ಅಶ್ಶೂರವೇ, ನಿನ್ನಿಂದ ಒಬ್ಬ ಮನುಷ್ಯನು ಬಂದು, ಯೆಹೋವನಿಗೆ ವಿರುದ್ಧವಾದ ಯೋಜನೆಗಳನ್ನು ಹಾಕಿದನು. ದುರಾಲೋಚನೆಯನ್ನು ಕೊಟ್ಟನು.

12 ಯೆಹೋವನು ಯೆಹೂದನಿಗೆ ಇಂತೆಂದನು; ‘‘ಅಶ್ಶೂರದ ಜನರು ಬಲಶಾಲಿಗಳು. ಅವರಲ್ಲಿ ಅಸಂಖ್ಯಾತ ಸೈನಿಕರಿದ್ದಾರೆ. ಆದರೆ ಅವರೆಲ್ಲಾ ತುಂಡರಿಸಲ್ಪಡುವರು. ಅವರೆಲ್ಲಾ ಹತರಾಗುವರು. ನನ್ನ ಜನರೇ, ನೀವು ಕಷ್ಟ ಅನುಭವಿಸುವಂತೆ ಮಾಡಿದೆನು. ಆದರೆ ಇನ್ನು ಮುಂದೆ ಹಾಗೆ ಮಾಡುವುದಿಲ್ಲ.

13 ನಾನು ನಿಮ್ಮನ್ನು ಸ್ವತಂತ್ರರನ್ನಾಗಿ ಬಿಟ್ಟಿದ್ದೇನೆ. ಅಶ್ಶೂರದವರ ಹಿಡಿತದಿಂದ ನಿಮ್ಮನ್ನು ಪಾರು ಮಾಡಿದ್ದೇನೆ. ನಿಮ್ಮ ಭುಜದಿಂದ ನೊಗವನ್ನು

ತೆಗೆದುಹಾಕುವೆನು. ನಿಮ್ಮನ್ನು ಬಂಧಿಸಿದ್ದ
ಸಂಕೋಲೆಯನ್ನು ಮುರಿದುಹಾಕುವೆನು.''

14 ಅಶ್ಶೂರದ ಅರಸನೇ, ನಿನ್ನ ವಿಷಯವಾಗಿ
ಯೆಹೋವನು ಕೊಟ್ಟ ಆಜ್ಞೆ ಏನೆಂದರೆ, ''ನಿನ್ನ
ಹೆಸರನ್ನು ಧರಿಸುವ ಸಂತತಿಯವರು ಯಾರೂ
ಇರರು. ನಿನ್ನ ಕೆತ್ತನೆಯ ವಿಗ್ರಹಗಳನ್ನು ನಾನು
ನಾಶಮಾಡುವೆನು. ನಿನ್ನ ದೇವರುಗಳ ಆಲಯ
ದಲ್ಲಿರುವ ಲೋಹದ ಬೊಂಬೆಗಳನ್ನು ಕೆಡವಿ
ಬಿಡುವೆನು. ನಿನ್ನ ಅಂತ್ಯವು ಬೇಗನೇ ಬರಲಿರುವು
ದರಿಂದ ನಿನಗೆ ಸಮಾಧಿಯನ್ನು ತಯಾರು
ಮಾಡುತ್ತಿದ್ದೇನೆ.''

15 ಯೆಹೂದನೇ, ನೋಡು! ಬೆಟ್ಟಗಳ ಮೇಲಿ ನಿಂದ
ಬರುವವನನ್ನು ನೋಡು. ಅವನು ಶುಭ ಸಮಾ
ಚಾರವನ್ನು ತರುವವನು. ಸಮಾಧಾನ ಉಂಟೆಂದು
ಅವನು ಸಾರುತ್ತಾನೆ. ಯೆಹೂದವೇ ನಿನ್ನ ವಿಶೇಷ
ಹಬ್ಬಗಳನ್ನು ಆಚರಿಸು. ನೀನು ವಾಗ್ದಾನ ಮಾಡಿ
ದ್ದನ್ನು ನೆರವೇರಿಸು. ಆ ಕೆಲಸಕ್ಕೆ ಬಾರದ ಜನರು
ನಿನ್ನ ಬಳಿಗೆ ಬಂದು ನಿನ್ನ ಮೇಲೆ ಧಾಳಿ ಮಾಡುವ
ದಿಲ್ಲ. ಯಾಕೆಂದರೆ ಆ ದುಷ್ಟ ಜನರೆಲ್ಲಾ ನಾಶ
ವಾಗಿರುತ್ತಾರೆ.

### ನಿನೆವೆಯು ನಾಶವಾಗುವದು

2 ವೈರಿಯು ನಿನ್ನ ಮೇಲೆ ಬರುವನು. ಆದುದರಿಂದ
ನಿನ್ನ ಪಟ್ಟಣದ ಬುರುಜುಗಳನ್ನು ಕಾಯಿ.
ಮಾರ್ಗದ ಮೇಲೆ ಕಣ್ಣಿಡು. ಯುದ್ಧಕ್ಕೆ ತಯಾ
ರಾಗು. ರಣರಂಗಕ್ಕೆ ಹೋಗಲು ಸಿದ್ಧನಾಗು.

2 ಹೌದು, ಯೆಹೋವನು ಯಾಕೋಬನ ವೈಭವ
ವನ್ನು ಇಸ್ರೇಲಿನ ವೈಭವವಾಗಿ ಸ್ಥಾಪಿಸುವನು.
ಇಸ್ರೇಲಿನಂತೆ ತಿರುಗಿ ಮಾಡುವನು. ವೈರಿಯು ಅವ
ರನ್ನು ನಾಶಮಾಡಿ ಅವರ ದ್ರಾಕ್ಷಿಬಳ್ಳಿಯನ್ನು
ಹಾಳುಮಾಡಿದನು.

3 ಆ ಸೈನಿಕರ ಗುರಾಣಿಗಳು ಕೆಂಪಗಿವೆ. ಅವರ
ಸಮವಸ್ತ್ರಗಳು ಕೆಂಪುಬಣ್ಣದಿಂದ ಹೊಳೆಯುತ್ತಿವೆ.
ಅವರ ರಥಗಳು ಯುದ್ಧಕ್ಕಾಗಿ ಸಾಲುಗಟ್ಟಿ ನಿಂತಿವೆ
ಮತ್ತು ಬೆಂಕಿಯ ಜ್ವಾಲೆಯಂತೆ ಹೊಳೆಯುತ್ತಿವೆ.
ಅವರ ಭರ್ಜಿಗಳು ಎತ್ತಲ್ಪಟ್ಟಿವೆ.

4 ರಸ್ತೆಯ ಮೇಲೆ ರಥಗಳು ರಭಸದಿಂದ ಓಡುತ್ತಿವೆ.
ನಗರದ ಚೌಕಕ್ಕೆ ಹಿಂದೆ ಮುಂದೆ ಓಡುತ್ತಿವೆ. ಅವು
ಉರಿಯುವ ಪಂಜಿನೋಪಾದಿಯಲ್ಲಿವೆ, ಒಂದೆಡೆ
ಯಿಂದ ಇನ್ನೊಂದೆಡೆಗೆ ಹಾರುವ ಮಿಂಚಿನಂತಿವೆ.

5 ವೈರಿಗಳು ತಮ್ಮ ಶೂರ ಯೋಧರನ್ನು ಕರೆಯು
ತ್ತಿದ್ದಾರೆ. ಅವರು ಮುನ್ನುಗ್ಗುವಾಗ ಎಡವಿ
ಬೀಳುವರು, ಗೋಡೆಗಳ ಕಡೆಗೆ ನುಗ್ಗಿ ತಮ್ಮ
ಗುರಾಣಿಗಳನ್ನು ಇಡುವರು.

6 ಆದರೆ ಹೊಳೆಯ ಕದಗಳು ತೆರೆಯಲ್ಪಟ್ಟಿವೆ. ಅದರ
ಮೂಲಕ ವೈರಿಗಳು ಮುನ್ನುಗ್ಗುತ್ತಿದ್ದಾರೆ. ಅರಸನ
ಮನೆಯನ್ನು ನಾಶಮಾಡುತ್ತಿದ್ದಾರೆ.

7 ವೈರಿಗಳು ರಾಣಿಯನ್ನು ಎತ್ತಿಕೊಂಡು ಹೋಗು
ತ್ತಾರೆ. ಆಕೆಯ ಸೇವಕಿಯರು ಪಾರಿವಾಳಗಳಂತೆ
ಮುಲುಗುತ್ತಿದ್ದಾರೆ. ತಮ್ಮ ದುಃಖವನ್ನು ಪ್ರದರ್ಶಿ
ಸಲು ಎದೆಯನ್ನು ಬಡಕೊಳ್ಳುತ್ತಿದ್ದಾರೆ.

8 ನಿನೆವೆಯು ನೀರು ಬತ್ತುತ್ತಿರುವ ಕೊಳದಂತಿದೆ.
''ನಿಲ್ಲಿ, ನಿಲ್ಲಿ, ಓಡಿಹೋಗಬೇಡಿ'' ಎಂದು ಜನರು
ಬೊಬ್ಬಿಡುತ್ತಾರೆ. ಆದರೆ ಅದರಿಂದ ಪ್ರಯೋಜನ
ವಿಲ್ಲ.

9 ನಿನೆವೆಯನ್ನು ನಾಶಮಾಡುವ ಸೈನಿಕರೇ, ಬೆಳ್ಳಿ
ಬಂಗಾರಗಳನ್ನು ತೆಗೆದುಕೊಳ್ಳಿರಿ. ತೆಗೆದು
ಕೊಳ್ಳಲು ಎಷ್ಟೋ ವಸ್ತುಗಳಿವೆ. ಎಷ್ಟೋ ನಿಕ್ಷೇಪ
ಗಳಿವೆ.

10 ''ಈಗ ನಿನೆವೆಯು ಖಾಲಿಯಾಯಿತು. ಎಲ್ಲಾ
ದೋಚಲ್ಪಟ್ಟಿತು. ನಗರವು ನಾಶವಾಯಿತು.
ಜನರು ತಮ್ಮ ಧೈರ್ಯ ಕಳಕೊಂಡಿದ್ದಾರೆ. ಭಯ
ದಿಂದ ಅವರ ಹೃದಯವು ಕರಗುತ್ತಿದೆ. ಮೊಣ
ಕಾಲುಗಳು ನಡುಗುತ್ತಿವೆ. ಅವರ ದೇಹವು
ಅಲ್ಲಾಡುತ್ತಿವೆ. ಭಯದಿಂದ ಅವರ ಮುಖವು ರಕ್ತ
ಹೀನವಾಗಿದೆ.

11 ಸಿಂಹದ ಗುಹೆಯಂತಿದ್ದ ನಿನೆವೆಯು ಎಲ್ಲಿ? ಗಂಡು
ಹೆಣ್ಣು ಸಿಂಹಗಳು ಅದರೊಳಗೆ ವಾಸಿಸುತ್ತಿದ್ದವು.
ಅದರ ಮರಿಗಳಿಗೆ ಭಯವಿಲ್ಲ.

12 ''ನಿನೆವೆಯು ಅರಸನಾದ ಸಿಂಹವು ಜನರನ್ನು
ಕೊಂದಿತು. ತನ್ನ ಮರಿಗಳಿಗೂ ಸಿಂಹಿಣಿಗೂ
ಆಹಾರವನ್ನು ಕೊಟ್ಟನು. ತನ್ನ ಗುಹೆಯನ್ನು
(ನಿನೆವೆ ರಾಜನು) ಮನುಷ್ಯರ ಶರೀರಗಳಿಂದಲೂ
ತಾನು ಕೊಂದ ಹೆಂಗಸರಿಂದಲೂ ತುಂಬಿಸಿದನು.

13 ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ, ''ನಿನೆವೆಯೇ, ನಾನು ನಿನಗೆ ವಿರೋಧ
ವಾಗಿದ್ದೇನೆ. ನಿನ್ನ ರಥಗಳನ್ನು ಸುಟ್ಟುಹಾಕುತ್ತೇನೆ.
ನಿನ್ನ ಎಳೆ ಸಿಂಹಗಳನ್ನು ರಣರಂಗದಲ್ಲಿ ಸಾಯಿಸು
ತ್ತೇನೆ. ಈ ಭೂಮಿಯ ಮೇಲೆ ಇನ್ನು ಯಾರನ್ನೂ
ಬೇಟೆ ಮಾಡದಿರುವಿ. ನಿನ್ನ ಸಂದೇಶವಾಹಕರಿಂದ
ಕೆಟ್ಟ ಸಮಾಚಾರವನ್ನು ಜನರು ಇನ್ನು ಎಂದಿಗೂ
ಕೇಳರು.''

### ನಿನೆವೆಗೊಂದು ಕೆಟ್ಟ ಸುದ್ದಿ

3 ಕೊಲೆಗಡುಕರ ಆ ಪಟ್ಟಣಕ್ಕೆ ಬಹಳ ಕೆಡುಕು
ಉಂಟಾಗುವದು. ನಿನೆವೆಯು ಸುಳ್ಳಿನಿಂದ
ತುಂಬಿದ ನಗರ. ಬೇರೆ ರಾಜ್ಯಗಳಿಂದ ದೋಚಿದ
ವಸ್ತುಗಳಿಂದ ತುಂಬಿದ ನಗರ. ಆ ಪಟ್ಟಣವು
ಕೊಲ್ಲುವುದನ್ನೂ ಲೂಟಿ ಮಾಡುವುದನ್ನೂ
ನಿಲ್ಲಿಸುವುದೇ ಇಲ್ಲ.

2 ಚಾವಟಿಯ ಚಟಾರವೆಂಬ ಶಬ್ದವನ್ನು ನೀನು ಕೇಳ
ಬಹುದು. ಚಕ್ರಗಳು ತಿರುಗುವ ಶಬ್ದ, ಕುದುರೆಗಳ
ನಾಗಾಲೋಟವನ್ನು ಮತ್ತು ರಥಗಳ ಹಾರಾಟ
ವನ್ನು ನೀವು ನೋಡಬಹುದು.

3 ಕುದುರೆಗಳ ಮೇಲಿರುವ ಸೈನಿಕರು ಆಕ್ರಮಣವೆಸ
ಗಿದ್ದಾರೆ. ಅವರ ಖಡ್ಗವು ಮಿಂಚುತ್ತದೆ. ಅವರ
ಬರ್ಜಿಯು ಹೊಳೆಯುತ್ತದೆ. ಬಹು ಮಂದಿ ಸತ್ತಿರು
ತ್ತಾರೆ. ಶವಗಳ ರಾಶಿ ಬಿದ್ದಿವೆ. ಅವು ಲೆಕ್ಕವಿಲ್ಲದಷ್ಟು
ಇವೆ. ಅವುಗಳ ಮೇಲೆ ಜನರು ಎಡವಿ ಬೀಳುತ್ತಾರೆ.

4 ‘‘ಇದಕ್ಕೆಲ್ಲಾ ಕಾರಣ ನಿನೆವೆ. ನಿನೆವೆಯು ಒಬ್ಬ ವೇಶ್ಯೆ.
ಆಕೆಗೆ ತೃಪ್ತಿ ಇರದು. ಆಕೆಗೆ ಹೆಚ್ಚು ಹೆಚ್ಚು ಬೇಕು.
ಅನೇಕ ದೇಶಗಳಿಗೆ ತನ್ನನ್ನು ಮಾರಿಬಿಟ್ಟಿದ್ದಾಳೆ.
ಮಂತ್ರ ತಂತ್ರಗಳನ್ನು ಉಪಯೋಗಿಸಿ ಜನರನ್ನು
ತನ್ನ ಗುಲಾಮರನ್ನಾಗಿ ಮಾಡಿದ್ದಾಳೆ.

5 ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ: ‘‘ನಿನೆವೆಯೇ ನಾನು ನಿನಗೆ ವಿರೋಧ
ವಾಗಿದ್ದೇನೆ. ನಿನ್ನ ಮೇಲಂಗಿಯನ್ನು ನಿನ್ನ ಮುಖದ
ತನಕ ಎತ್ತುವೆನು. ಜನಾಂಗಗಳು ನಿನ್ನ ಬೆತ್ತಲೆ
ತನವನ್ನು ನೋಡಲಿ. ನಿನ್ನ ನಾಚಿಕೆಯನ್ನು ಅವರು
ನೋಡಲಿ.

6 ಹೊಲಸುಗಳನ್ನು ನಿನ್ನ ಮೇಲೆ ಬಿಸಾಡುವೆನು.
ನಿನ್ನನ್ನು ದ್ವೇಷದಿಂದ ಕಾಣುವೆನು. ಜನರು ನಿನ್ನನ್ನು
ನೋಡಿ ನಗಾಡುವರು.

7 ನಿನ್ನನ್ನು ನೋಡಿದವರೆಲ್ಲರು ದಂಗುಬಡಿಯಲ್ಪ
ಟ್ಟರು. ‘ನಿನೆವೆಯು ನಾಶವಾಯಿತು. ಆಕೆಗಾಗಿ
ಯಾರು ಮರುಗುವರು?’ ಎಂದು ಜನರು ಹೇಳು
ವರು. ನಿನ್ನನ್ನು ಸಂತೈಸುವವರು ಯಾರೂ ಸಿಗುವು
ದಿಲ್ಲವಲ್ಲಾ?’’

8 ನಿನೆವೆಯೇ, ನೀನು ನೈಲ್ ನದಿಯ ದಡದಲ್ಲಿರುವ
ತೆಬೆಸ್‌ಗಿಂತಲೂ ಉತ್ತಮನೋ? ಇಲ್ಲ. ತೆಬೆಸ್‌ನ
ಸುತ್ತಲೂ ನೀರು ಇತ್ತು. ಆ ನೀರು ಆಕೆಯನ್ನು ತನ್ನ ವೈರಿಗ
ಳಿಂದ ಕಾಪಾಡಲು ಶಕ್ತವಾಯಿತು. ಆ ನೀರನ್ನು ಆಕೆಯು
ಗೋಡೆಯಂತೆ ಉಪಯೋಗಿಸಿದಳು. 9 ಇಥಿಯೋ
ಫಿಯಾ ಮತ್ತು ಈಜಿಪ್ಟ್ ತೆಬೆಸ್‌ಗೆ ಹೆಚ್ಚಿನ ಬಲವನ್ನು
ಕೊಟ್ಟವು. ಸುದಾನ್ ಮತ್ತು ಲಿಬ್ಯ ಆಕೆಯನ್ನು ಸಹಕರಿಸಿ
ದವು. 10 ಆದರೆ ತೆಬೆಸ್ ಸೋಲಿಸಲ್ಪಟ್ಟಿತು. ಆಕೆಯ ಪ್ರಜೆ
ಗಳು ಬೇರೆ ದೇಶಕ್ಕೆ ಕೈದಿಗಳಾಗಿ ಒಯ್ಯಲ್ಪಟ್ಟರು. ಸೈನಿಕರು
ಆಕೆಯ ಹಸುಗೂಸುಗಳನ್ನು ರಸ್ತೆಯ ಮೂಲೆಮೂಲೆ
ಗಳಲ್ಲಿ ಹೊಡೆದು ಸಾಯಿಸಿದರು. ತಮ್ಮಲ್ಲಿ ಯಾರು
ಉನ್ನತ ಅಧಿಕಾರಿಗಳನ್ನು ಗುಲಾಮರನ್ನಾಗಿ ಉಪ
ಯೋಗಿಸಬೇಕೆಂಬದಾಗಿ ಚೀಟುಹಾಕಿದರು. ಅವರು
ತೆಬೆಸ್‌ನ ಮುಖ್ಯ ಅಧಿಕಾರಿಗಳನ್ನು ಸಂಕೋಲೆಗಳಿಂದ
ಬಂಧಿಸಿದರು.

11 ಆದುದರಿಂದ ನಿನೆವೆಯೇ, ನೀನು ಸಹ ಕುಡಿದು
ಅಮಲೇರಿದವರಂತೆ ಕೆಳಗೆ ಬಿದ್ದುಬಿಡುವಿ. ನೀನು ಅಡಗಿ
ಕೊಳ್ಳಲು ಪ್ರಯತ್ನಿಸುವಿ. ವೈರಿಯಿಂದ ತಪ್ಪಿಸಿಕೊಳ್ಳಲು
ಸುರಕ್ಷಿತವಾದ ಸ್ಥಳವನ್ನು ಹುಡುಕುವಿ. 12 ಆದರೆ
ನಿನೆವೆಯೇ, ನಿನ್ನ ಎಲ್ಲಾ ಬಲವಾದ ಬುರುಜುಗಳು
ಅಂಜೂರದ ಮರದಂತಿರುವವು. ಹೊಸ ಅಂಜೂರ ಹಣ್ಣು
ಗಳು ಮಾಗುವವು. ಒಬ್ಬನು ಬಂದು ಮರವನ್ನು ಅಲ್ಲಾಡಿ
ಸಲು ಅಂಜೂರ ಹಣ್ಣುಗಳು ಅಲ್ಲಾಡಿಸುವವನ ಬಾಯಿಗೆ
ಬೀಳುವವು. ಅವನು ಅವುಗಳನ್ನು ತಿಂದುಬಿಡುವನು;
ಅವು ಇಲ್ಲವಾಗುವವು.

13 ನಿನೆವೆಯೇ, ನಿನ್ನ ಜನರೆಲ್ಲಾ ಹೆಂಗಸರಂತೆ, ವೈರಿ
ಸೈನಿಕರು ಅವರನ್ನು ಹಿಡಿದುಕೊಳ್ಳಲು ತಯಾರಾಗಿದ್ದಾರೆ.
ನಿನ್ನ ದೇಶದ ದ್ವಾರಗಳು, ವೈರಿಗಳು ಪ್ರವೇಶಿಸುವಂತೆ
ಅಗಲವಾಗಿ ತೆರೆಯಲ್ಪಟ್ಟಿವೆ. ದ್ವಾರದ ಬಾಗಲಿನ ಅಡ್ಡ
ಪಟ್ಟಿಯು ಬೆಂಕಿಯಿಂದ ಸುಟ್ಟಿರುತ್ತದೆ.

14 ನೀರನ್ನು ತಂದು ಪಟ್ಟಣದೊಳಗೆ ಶೇಖರಿಸಿಡು.
ಯಾಕೆಂದರೆ ವೈರಿ ಸೈನ್ಯವು ನಿನ್ನ ನಗರವನ್ನು ಮುತ್ತುವವು.
ನಗರದೊಳಗೆ ಅನ್ನ ನೀರನ್ನು ಯಾರಿಗೂ ತರಲು
ಬಿಡುವದಿಲ್ಲ. ನಿನ್ನ ಬುರುಜುಗಳನ್ನು ಬಲಪಡಿಸಿಕೋ.
ಹೆಚ್ಚು ಇಟ್ಟಿಗೆಗಳನ್ನು ಮಾಡುವಂತೆ ಅವೆಮಣ್ಣನ್ನು ಶೇಖ
ರಿಸು. ಗಾರೆಯನ್ನು ಕಲಸಿಕೋ. ಇಟ್ಟಿಗೆಗಳನ್ನು ಮಾಡುವ
ಅಚ್ಚನ್ನು ತೆಗೆದುಕೋ.

15 ಇವೆಲ್ಲವನ್ನು ನೀನು ಮಾಡಬಹುದು. ಆದರೂ
ಬೆಂಕಿಯು ನಿನ್ನನ್ನು ಸಂಪೂರ್ಣವಾಗಿ ನಾಶಮಾಡ
ಬಹುದು. ಖಡ್ಗವು ನಿನ್ನನ್ನು ಸಾಯಿಸುವದು. ನಿನ್ನ ದೇಶವು
ಮಿಡಿತೆಗಳ ಹಿಂಡಿನಿಂದ ತಿಂದು ಹಾಕಲ್ಪಟ್ಟ ದೇಶದಂತೆ
ಕಾಣುವುದು.

ನಿನೆವೆಯೇ, ನೀನು ಬೆಳೆಯುತ್ತಾ ಬೆಳೆಯುತ್ತಾ ಮಿಡಿತೆ
ಗಳ ಹಿಂಡಿನಂತಾದಿ. ನೀನು ಮಿಡಿತೆಗಳಂತಾದಿ. 16 ನಿನ್ನಲ್ಲಿ
ಅನೇಕ ವ್ಯಾಪಾರಸ್ಥರು ಊರೂರಿಗೆ ತಿರುಗಿ ವ್ಯಾಪಾರ
ಮಾಡುವವರಿದ್ದಾರೆ. ಅವರು ಆಕಾಶದಲ್ಲಿರುವ ನಕ್ಷತ್ರ
ಗಳಷ್ಟು ಇದ್ದಾರೆ. ಅವರು ಮಿಡಿತೆಗಳಂತೆ ಬಂದು,

ಎಲ್ಲವನ್ನು ತಿಂದು, ಮುಗಿಸಿದ ಬಳಿಕ ಹೋಗುವಂಥ
ವರಾಗಿದ್ದಾರೆ. [17]ನಿನ್ನ ಸರಕಾರದ ಅಧಿಕಾರಿಗಳು ಸಹ
ಮಿಡಿತೆಗಳಂತಿದ್ದಾರೆ. ಅವರು ಚಳಿಯ ದಿವಸದಲ್ಲಿ ಕಲ್ಲಿನ
ಗೋಡೆಯ ಮೇಲೆ ಬಂದು ಕುಳಿತುಕೊಳ್ಳುವ ಮಿಡಿತೆ
ಯಂತಿದ್ದಾರೆ. ಆದರೆ ಸೂರ್ಯನು ಮೇಲೆ ಬಂದಾಗ
ಬಿಸಿಲು ಏರಿ ಕಲ್ಲು ಬಿಸಿಯಾದಾಗ ಆ ಮಿಡಿತೆಗಳೆಲ್ಲಾ
ಹಾರಿಹೋಗುವವು. ಅವು ಎಲ್ಲಿಗೆ ಹೋದವು ಎಂದು
ಯಾರಿಗೂ ಗೊತ್ತಿಲ್ಲ. ನಿನ್ನ ಅಧಿಕಾರಿಗಳೂ ಅದೇ
ರೀತಿಯಲ್ಲಿರುವರು.

[18]ಅಶ್ಶೂರದ ಅರಸನೇ, ನಿನ್ನ ಕುರುಬರು ನಿದ್ರಿಸುತ್ತಿ
ದ್ದಾರೆ. ಆ ಬಲಾಢ್ಯ ಕುರುಬರು ನಿದ್ರೆ ಮಾಡುತ್ತಿದ್ದಾರೆ.
ಮತ್ತು ನಿನ್ನ ಕುರಿಗಳು ಬೆಟ್ಟಗಳ ಮೇಲೆ ಚದರಿ ಹೋಗಿವೆ.
ಅವುಗಳನ್ನು ಹಿಂತಿರುಗಿಸಿ ಒಟ್ಟುಗೂಡಿಸಲು ಯಾರೂ
ಇಲ್ಲ. [19]ನಿನೆವೆಯೇ, ನೀನು ತೀವ್ರವಾದ ಗಾಯ ಹೊಂದಿ
ರುವಿ. ಯಾವದೂ ನಿನ್ನನ್ನು ಗುಣಪಡಿಸಲಾರದು. ನಿನ್ನ
ನಾಶನದ ಸುದ್ದಿ ಕೇಳಿದವರೆಲ್ಲರೂ ಚಪ್ಪಾಳೆ ತಟ್ಟುವರು.
ಅವರು ಹರ್ಷಿಸುವರು. ಯಾಕೆಂದರೆ ನಿನಗಾದ ತೀವ್ರ
ಗಾಯದ ನೋವನ್ನು ಅವರೆಲ್ಲರೂ ಅನುಭವಿಸಿದರು.

# ಹಬಕ್ಕೂಕ

## ಯೆಹೋವನಿಗೆ ಹಬಕ್ಕೂಕನ ದೂರು

1 ಪ್ರವಾದಿಯಾದ ಹಬಕ್ಕೂಕನಿಗೆ ಕೊಡಲ್ಪಟ್ಟ ಸಂದೇಶ.
2 ಯೆಹೋವನೇ, ನಾನು ನಿನ್ನಿಂದ ಸಹಾಯವನ್ನು
ಕೇಳುತ್ತಲೇ ಇದ್ದೇನೆ. ನನ್ನ ಮೊರೆಯನ್ನು ಯಾವಾಗ
ಕೇಳುವಿ? ನಾನು ಹಿಂಸೆಯ ವಿಷಯವಾಗಿ ನಿನ್ನನ್ನು
ಕೂಗಿದರೂ ನೀನು ಏನೂ ಮಾಡಲಿಲ್ಲ. 3 ಜನರು ವಸ್ತು
ಗಳನ್ನು ಕದ್ದುಕೊಂಡು ಇತರರನ್ನು ಗಾಯಗೊಳಿಸುತ್ತಿ
ದ್ದಾರೆ. ಜನರು ಜಗಳ ಮಾಡುತ್ತಾ ಕಾದಾಡುತ್ತಿದ್ದಾರೆ.
ಇಂಥಾ ಭಯಂಕರ ಸಂಗತಿಗಳನ್ನು ನೋಡುವಂತೆ ಯಾಕೆ
ಮಾಡುತ್ತೀ. 4 ಕಾನೂನು ಬಲಹೀನವಾಗಿದೆ. ಅದು ಸರಿ
ಯಾದ ನ್ಯಾಯ ಕೊಡುವದಿಲ್ಲ. ದುಷ್ಟರು ಶಿಷ್ಟರ ಮೇಲೆ
ವ್ಯಾಜ್ಯವಾಡಿ ಗೆಲ್ಲುತ್ತಿದ್ದಾರೆ. ಆದುದರಿಂದ ಕಾನೂನು
ನ್ಯಾಯವಾಗಿಯೇ ಇಲ್ಲ. ನ್ಯಾಯಕ್ಕೆ ಜಯವಿಲ್ಲ.

## ಹಬಕ್ಕೂಕನಿಗೆ ದೇವರ ಉತ್ತರ

5 ಯೆಹೋವನು ಉತ್ತರಿಸುತ್ತಾ, ‘‘ಇತರ ದೇಶಗಳನ್ನು
ನೋಡು, ಅವರನ್ನು ಗಮನಿಸು. ನೀನು ಆಶ್ಚರ್ಯ
ಪಡುವಿ. ನೀನು ನಿನ್ನ ಜೀವಮಾನದಲ್ಲಿಯೇ ಅಚ್ಚರಿ ಪಡು
ವಂಥ ವಿಷಯವನ್ನು ನಾನು ನಡಿಸುತ್ತೇನೆ. ನೀನು ಅದನ್ನು
ನೋಡಿ ನಂಬುವಿ. ನಿನಗೆ ಅದರ ವಿಷಯವಾಗಿ ತಿಳಿಸಲ್ಪ
ಟ್ಟರೂ ನೀನು ನಂಬುವದಿಲ್ಲ. 6 ನಾನು ಬಾಬಿಲೋನಿನ
ವರನ್ನು ಬಲಾಢ್ಯ ಜನಾಂಗವಾಗಿ ಮಾಡುವೆನು. ಅವರು
ಬಲಶಾಲಿಗಳೂ ನಿರ್ದಯಿಗಳು ಆಗಿದ್ದಾರೆ. ಅವರು
ಲೋಕದಲ್ಲೆಲ್ಲಾ ಸಂಚರಿಸುವರು. ತಮ್ಮದಲ್ಲದ ಮನೆಗ
ಳನ್ನು ಮತ್ತು ನಗರಗಳನ್ನು ತಮ್ಮ ವಶ ಮಾಡಿಕೊಳ್ಳುವರು.
7 ಬಾಬಿಲೋನಿನ ಜನರು ಇತರರಲ್ಲಿ ಭಯ ಹುಟ್ಟಿಸು
ವರು. ಅವರು ತಮ್ಮ ಇಷ್ಟ ಬಂದ ಹಾಗೆ ಮಾಡುವರು;
ಇಷ್ಟ ಬಂದ ಕಡೆಗೆ ಹೋಗುವರು. 8 ಅವರ ಕುದುರೆಗಳು
ಚಿರತೆಗಿಂತ ವೇಗವಾಗಿವೆ; ಸೂರ್ಯಾಸ್ತಮಾನ ಕಾಲದಲ್ಲಿ
ತೋಳಗಳಿಗಿಂತ ಭಯಂಕರವಾಗಿವೆ. ಅವರ ರಾಹುತರು
ಬಹುದೂರ ದೇಶದಿಂದ ಬಂದವರು. ಹಸಿದ ಗಿಡುಗ
ಹೇಗೆ ಆಕಾಶದಿಂದ ನೆಲದ ಮೇಲಿರುವ ಆಹಾರದ ಮೇಲೆ
ಬೀಳುತ್ತದೋ ಅದೇ ರೀತಿಯಲ್ಲಿ ಅವರ ರಾಹುತರು
ವೈರಿಗಳ ಮೇಲೆ ಬೀಳುವರು. 9 ಅವರು ಬಯಸುವುದು
ಯುದ್ಧವೊಂದನ್ನೇ. ಅವರ ಸೈನ್ಯವು ಮರುಭೂಮಿಯ
ಮೇಲೆ ಬೀಸುವ ಗಾಳಿಯ ತರಹ ವೇಗವಾಗಿ ಸಂಚರಿಸು
ವದು. ಮತ್ತು ಬಾಬಿಲೋನಿನ ಸೈನಿಕರು ಮರಳಿನಷ್ಟು
ಅಸಂಖ್ಯಾತ ಜನರನ್ನು ಸೆರೆಹಿಡಿಯುತ್ತಾರೆ.

10 ‘‘ಇತರ ಜನಾಂಗದ ಅರಸರನ್ನು ಬಾಬಿಲೋನಿನ
ಸೈನಿಕರು ಗೇಲಿ ಮಾಡುತ್ತಾರೆ. ಪರದೇಶದ ಅರಸರು
ಅವರಿಗೆ ಹಾಸ್ಯಾಸ್ಪದವಾಗಿರುತ್ತಾರೆ. ಕೋಟೆಕೊತ್ತಲುಗ
ಳಿರುವ ನಗರವನ್ನು ನೋಡಿ ಅವರು ನಗಾಡುವರು. ಆ
ಸೈನಿಕರು ಕೋಟೆಯ ಗೋಡೆಯ ತನಕ ಮಣ್ಣುದಿಬ್ಬವ
ನ್ನೇರಿಸಿ, ಸುಲಭವಾಗಿ ಪಟ್ಟಣಗಳನ್ನು ವಶಮಾಡಿಕೊಳ್ಳು
ವರು. 11 ಆ ಬಳಿಕ ಅವರು ಗಾಳಿಯಂತೆ ಅಲ್ಲಿಂದ ಬೇರೆ
ಸ್ಥಳಗಳ ಮೇಲೆ ಧಾಳಿ ಮಾಡಲು ಹೊರಟು ಹೋಗು
ವರು. ಬಾಬಿಲೋನಿನವರು ಆರಾಧಿಸುವ ಒಂದೇ
ವಿಷಯ, ಯಾವದೆಂದರೆ ಅವರ ಸ್ವಂತ ಶಕ್ತಿಯನ್ನೇ.’’

## ಹಬಕ್ಕೂಕನ ಎರಡನೇ ದೂರು

12 ಆಗ ಹಬಕ್ಕೂಕನು ಹೇಳಿದ್ದೇನೆಂದರೆ,

‘‘ಯೆಹೋವನೇ, ನೀನು ನಿತ್ಯಕಾಲಕ್ಕೂ ಜೀವಿಸುವ
ದೇವರು. ನೀನು ಎಂದಿಗೂ ಸಾಯದ ನನ್ನ
ಪರಿಶುದ್ಧ ದೇವರು. ನೀನು ಯೋಚಿಸುವದನ್ನು
ನೆರವೇರಿಸಲು ಬಾಬಿಲೋನಿನವರನ್ನು ಸೃಷ್ಟಿಸಿದ್ದೀ.
ನಮ್ಮ ಬಂಡೆಯಾದ ನೀನು ಯೆಹೂದದ
ಜನರನ್ನು ಶಿಕ್ಷಿಸುವುದಕ್ಕಾಗಿಯೇ ಅವರನ್ನು
ಸೃಷ್ಟಿಸಿದ್ದೀ.

13 ಕೆಡುಕನ್ನು ದೃಷ್ಟಿಸಲಾರದಷ್ಟು ನಿನ್ನ ಕಣ್ಣುಗಳು
ಶುದ್ಧವಾಗಿವೆ. ಜನರು ಮಾಡುವ ದುಷ್ಕೃತ್ಯಗಳನ್ನು
ನೀನು ನೋಡಲಾರೆ. ಹೀಗಿರಲು ಆ ಕೆಡುಕರು
ಜಯಗಳಿಸುವದನ್ನು ನೀನು ಹೇಗೆ ವೀಕ್ಷಿಸಬಲ್ಲೆ?
ದುಷ್ಟರು ಒಳ್ಳೆಯವರನ್ನು ಸೋಲಿಸಿದಾಗ ನೀನು

ನಿನ್ನ ಪ್ರತಿಕ್ರಿಯೆಯನ್ನು ವ್ಯಕ್ತಪಡಿಸಬಾರದೇಕೆ?
ಕೆಟ್ಟ ಜನರು ಒಳ್ಳೇ ಜನರನ್ನು ಸೋಲಿಸುವುದನ್ನು
ನೀನು ಹೇಗೆ ನೋಡುವಿ?

14 ‘‘ಸಮುದ್ರದಲ್ಲಿರುವ ಮೀನುಗಳಂತೆ ನೀನು ಜನ
ರನ್ನು ಸೃಷ್ಟಿಸಿದ್ದೀ. ಅವರು ಒಬ್ಬ ನಾಯಕನಿರದ
ಸಮುದ್ರಪ್ರಾಣಿಗಳಂತಿದ್ದಾರೆ,
15 ಅವೆಲ್ಲವನ್ನು ಗಾಳ, ಬಲೆಗಳಿಂದ ವೈರಿಯು ಹಿಡಿ
ಯುತ್ತಾನೆ. ಬಲೆಯಲ್ಲಿ ಅವುಗಳನ್ನು ವೈರಿಯು
ಹಿಡಿದು ಎಳೆಯುವನು. ತಾನು ಹಿಡಿದನೆಂದು
ವೈರಿಯು ಹರ್ಷಿಸುವನು.
16 ಅವನ ಬಲೆಗಳು ಅವನು ಧನಿಕನಂತೆ ಜೀವಿಸಲು
ಸಹಾಯ ಮಾಡುವವು. ಅವನು ಒಳ್ಳೇ ಆಹಾರ
ವನ್ನು ಉಣ್ಣುವನು. ಅದಕ್ಕೆ ವೈರಿಯು ತನ್ನ ಬಲೆ
ಯನ್ನು ಆರಾಧಿಸುವನು. ಅವನು ಯಜ್ಞವನ್ನರ್ಪಿಸಿ
ಧೂಪ ಹಾಕುವನು. ಬಲೆಯನ್ನು ಗೌರವಿಸುವನು.
17 ಅವನು ತನ್ನ ಬಲೆಯಿಂದ ಐಶ್ವರ್ಯವನ್ನು
ಹೊಂದುತ್ತಾ ಮುಂದರಿಯುವನೋ? ನಿರ್ದಯೆ
ಯಿಂದ ಜನರನ್ನು ನಾಶಮಾಡುತ್ತಲೇ
ಇರುವನೋ?

2 ‘‘ನಾನು ಕಾವಲುಗಾರನಂತೆ ನಿಂತುಕೊಂಡು
ಗಮನಿಸುವೆನು. ಯೆಹೋವನು ನನಗೆ ಏನನ್ನು
ವನೋ ಎಂದು ನಾನು ನಿರೀಕ್ಷಿಸುತ್ತಿರುವೆನು.
ಆತನು ನನ್ನ ಪ್ರಶ್ನೆಗಳಿಗೆ ಹೇಗೆ ಉತ್ತರಿಸುವ
ನೆಂಬುದನ್ನು ತಾಳ್ಮೆಯಿಂದ ಗಮನಿಸುವೆನು.’’

**ಹಬಕ್ಕೂಕನಿಗೆ ದೇವರ ಉತ್ತರ**

2 ಯೆಹೋವನು ನನಗೆ ಹೇಳಿದ್ದು: ‘‘ನಾನು ನಿನಗೆ
ತೋರಿಸುವದನ್ನು ಬರೆ. ಜನರು ಸುಲಭವಾಗಿ ಓದುವಂತೆ
ಅದನ್ನು ದೊಡ್ಡ ಹಲಗೆಗಳ ಮೇಲೆ ಬರೆ.
3 ಭವಿಷ್ಯದ
ಒಂದು ವಿಶೇಷ ಸಮಯದ ಕುರಿತಾಗಿ ಈ ಸಂದೇಶ. ಈ
ಸಂದೇಶವು ಅಂತ್ಯದ ವಿಷಯವಾಗಿ ಇದೆ. ಇದು ಖಂಡಿತ
ವಾಗಿಯೂ ನೆರವೇರುತ್ತದೆ. ಆ ಸಮಯವು ಎಂದಿಗೂ
ಬರುವುದಿಲ್ಲ ಎಂಬಂತೆ ಕಾಣಬಹುದು. ಆದರೆ ತಾಳ್ಮೆ
ಯಿಂದಿರು; ಅದನ್ನು ನಿರೀಕ್ಷಿಸುತ್ತಾ ಇರು. ಆ ಸಮಯವು
ಬರುವದು. ಅದು ತಡವಾಗುವುದಿಲ್ಲ.
4 ಯಾವ ಜನರು
ಅದರ ವಿಚಾರವಾಗಿ ಕೇಳಲು ನಿರಾಕರಿಸುವರೋ ಅವರಿ
ಗಾಗಿ ಈ ಸಂದೇಶವಿರುವದಿಲ್ಲ. ಆದರೆ ಒಬ್ಬ ಸತ್ಪುರು
ಷನು ಈ ಸಂದೇಶವನ್ನು ನಂಬುವನು. ಆ ಸತ್ಪುರುಷನು
ತಾನು ನಂಬಿದ ನಿಮಿತ್ತವಾಗಿ ಬದುಕುವನು.’’

5 ಯೆಹೋವನು ಹೇಳಿದ್ದು: ‘‘ಒಬ್ಬನನ್ನು ದ್ರಾಕ್ಷಾ
ರಸವು ಮೋಸಪಡಿಸಬಹುದು. ಅದೇ ರೀತಿಯಲ್ಲಿ ಬಲಿ
ಷ್ಠನ ಗರ್ವವು ಅವನನ್ನು ಮೋಸಪಡಿಸಬಹುದು. ಆದರೆ
ಅವನಿಗೆ ಸಮಾಧಾನ ಸಿಕ್ಕುವುದಿಲ್ಲ. ಅವನು ಮರಣದಂತಿ
ರುವನು. ಅವನಿಗೆ ಯಾವಾಗಲೂ ಹೆಚ್ಚೆಚ್ಚು ಬೇಕು.
ಮರಣದಂತೆ ಅವನಿಗೆ ತೃಪ್ತಿಯೇ ಇರದು. ಅವನು
ಜನಾಂಗಗಳನ್ನು ಸೋಲಿಸುತ್ತಲೇ ಇರುವನು. ಆ
ಜನರನ್ನು ತನ್ನ ಕೈದಿಗಳನ್ನಾಗಿ ಮಾಡುತ್ತಲೇ ಇರುವನು.
6 ಆದರೆ ಬೇಗನೇ ಅವರೆಲ್ಲಾ ಇವನನ್ನು ನೋಡಿ
ನಗಾಡುವರು. ಅವನ ಸೋಲುವಿಕೆಯ ಕಥೆಗಳನ್ನು
ವರ್ಣಿಸುವರು; ನಗಾಡುತ್ತಾ, ‘ಎಂಥಾ ದುಃಖಕರ ಸಂಗತಿ,
ಅಷ್ಟೆಲ್ಲಾ ಸಂಪಾದಿಸಿದವನು ಅದನ್ನು ಇಟ್ಟುಕೊಳ್ಳ
ಲಾಗಲಿಲ್ಲವಲ್ಲ. ಅವನು ಸಾಲಗಳನ್ನು ವಸೂಲಿ ಮಾಡಿ
ತನ್ನನ್ನು ಐಶ್ವರ್ಯವಂತನನ್ನಾಗಿ ಮಾಡಿಕೊಂಡನು.’

7 ‘‘ಬಲಶಾಲಿಯಾದ ಮನುಷ್ಯನೇ, ನೀನು ಜನರಿಂದ
ಹಣವನ್ನು ಸುಲುಕೊಂಡಿದ್ದೀ. ಒಂದು ದಿವಸ ಆ ಜನರು
ಎಚ್ಚರವಾಗಿ ತಮಗೆ ಏನಾಯಿತೆಂದು ಅರಿತುಕೊಳ್ಳು
ವರು. ನಿನಗೆ ವಿರುದ್ಧವಾಗಿ ಏಳುವರು. ನಿನ್ನ ಕೈಯಿಂದ
ಆ ವಸ್ತುಗಳನ್ನು ಕಿತ್ತುಕೊಳ್ಳುವರು. ಆಗ ನೀನು ಭಯ
ದಿಂದ ತುಂಬುವಿ.
8 ಎಷ್ಟೋ ಜನಾಂಗಗಳಿಂದ ನೀನು
ವಸ್ತುಗಳನ್ನು ಅಪಹರಿಸಿದ್ದೀ. ಅವರು ನಿನ್ನಿಂದ ಇನ್ನೂ
ಹೆಚ್ಚಾಗಿ ಅಪಹರಿಸುವರು. ನೀನು ಎಷ್ಟೋ ಮಂದಿಯನ್ನು
ಕೊಂದಿರುತ್ತೀ; ದೇಶಗಳನ್ನೂ ನಗರಗಳನ್ನೂ ನಾಶ
ಮಾಡಿರುತ್ತೀ. ಅಲ್ಲಿಯ ಎಷ್ಟೋ ಜನರನ್ನು ಸಂಹರಿಸಿ
ರುತ್ತೀ.
9 ಹೌದು, ಕೆಟ್ಟದ್ದನ್ನು ಮಾಡಿ ಧನಿಕನಾದವನಿಗೆ
ಬಹಳ ಕೇಡಾಗುವುದು. ಆ ಮನುಷ್ಯನು ಒಂದು ಸುರಕ್ಷಿತ
ವಾದ ಸ್ಥಳದಲ್ಲಿ ವಾಸಿಸಲು ಇದನ್ನೆಲ್ಲಾ ಮಾಡುತ್ತಾನೆ.
ಹಾಗೆ ಮಾಡುವದರಿಂದ ಬೇರೆ ಜನರು ಅವನಿಂದ ಕಿತ್ತು
ಕೊಳ್ಳಲು ಸಾಧ್ಯವಿಲ್ಲವೆಂದು ಅವನು ತಿಳಿಯುತ್ತಾನೆ.
ಆದರೆ ಕೆಟ್ಟ ಸಂಗತಿಗಳು ಅವನಿಗೆ ಸಂಭವಿಸುವವು.

10 ‘‘ಎಷ್ಟೋ ಜನರನ್ನು ನಾಶಮಾಡಲು ನೀನು
ಯೋಜನೆ ತಯಾರಿಸಿರುತ್ತೀ. ಆದರೆ ಆ ಯೋಜನೆಗಳು
ನಿನ್ನ ಮನೆಗೆ ನಾಚಿಕೆಯನ್ನು ತಂದೊಡ್ಡುವವು. ನೀನು ಕೆಟ್ಟ
ಕಾರ್ಯಗಳನ್ನು ಮಾಡಿದ್ದರಿಂದ ನೀನು ನಿನ್ನ ಪ್ರಾಣವನ್ನು
ಕಳಕೊಳ್ಳುವಿ.

11 ಗೋಡೆಯ ಕಲ್ಲುಗಳು ನಿನಗೆ ವಿರುದ್ಧವಾಗಿ
ಕೂಗುವವು. ಯಾಕೆ, ನಿನ್ನ ಮನೆಯ ಮರದ ಜಂತೆಗಳು
ಸಹ ನೀನು ದುಷ್ಟತನವನ್ನು ಮಾಡಿದ್ದೀ ಎಂದು ಸಾಕ್ಷಿ
ಹೇಳುವವು.

12 ‘‘ಒಬ್ಬ ನಾಯಕನು ದುಷ್ಟತ್ವವನ್ನು ಮಾಡಿ ಒಂದು
ಪಟ್ಟಣ ಕಟ್ಟುವದಕ್ಕಾಗಿ ಜನರನ್ನು ಕೊಲ್ಲುವದಾದರೆ
ಅವನಿಗೆ ಬಹಳ ಕೇಡಾಗುವದು.
13 ಸರ್ವಶಕ್ತನಾದ

ಯೆಹೋವನು ಆ ಜನರು ಕಟ್ಟುವ ಪ್ರತಿಯೊಂದನ್ನೂ ಬೆಂಕಿಯಿಂದ ನಾಶಮಾಡುವ ತೀರ್ಮಾನವನ್ನು ಮಾಡಿರುತ್ತಾನೆ. ಅವರು ಮಾಡಿದ ಕೆಲಸವೆಲ್ಲವೂ ಶೂನ್ಯ ವಾಗುವದು. 14ಆಗ ಎಲ್ಲಾ ಕಡೆಗಳಲ್ಲಿರುವ ಜನರು ಯೆಹೋವನ ಮಹಿಮೆಯನ್ನು ತಿಳಿದುಕೊಳ್ಳುವರು. ಹೇಗೆ ನೀರು ಸಮುದ್ರಕ್ಕೆ ಹರಿಯುತ್ತದೋ ಹಾಗೆ ಈ ವರ್ತಮಾನವು ಎಲ್ಲಾ ಕಡೆಗೆ ಹಬ್ಬುವದು. 15ತಾನು ಸಿಟ್ಟು ಗೊಂಡು ಇತರರು ಸಂಕಟಪಡುವಂತೆ ಮಾಡುವವನಿಗೆ ಬಹಳ ಕೇಡು ಉಂಟಾಗುವದು. ಸಿಟ್ಟಿನ ಭರದಲ್ಲಿ ಆ ಮನುಷ್ಯನು ಇತರ ಜನರನ್ನು ನೆಲಕ್ಕೆ ಅಪ್ಪಳಿಸಿ ಬಿಡುವನು. ಆತನು ಅವರನ್ನು ಅಮಲೇರಿದವರಂತೆಯೂ ಬೆತ್ತಲೆ ಯಾಗಿರುವವರಂತೆಯೂ ಪರಿಗಣಿಸುತ್ತಾನೆ.

16‘‘ಆದರೆ ಅವನು ಯೆಹೋವನ ಕೋಪವನ್ನು ತಿಳಿದು ಕೊಳ್ಳುವನು. ಆ ಕೋಪವು ಯೆಹೋವನ ಬಲಗೈಯಲ್ಲಿ ರುವ ವಿಷದ ಪಾತ್ರೆಯಂತಿರುವುದು. ಆ ವ್ಯಕ್ತಿಯು ಆ ಕೋಪವನ್ನು ರುಚಿ ನೋಡುವನು ಮತ್ತು ಅಮಲೇರಿದವ ನಂತೆ ನೆಲದ ಮೇಲೆ ಕುಸಿದು ಬೀಳುವನು. ದುಷ್ಟ ಅಧಿ ಪತಿಯೇ, ನೀನು ಆ ಪಾತ್ರೆಯಿಂದ ಕುಡಿಯುವಿ. ನಿನಗೆ ಅವಮಾನವೇ ಹೊರತು, ಮಾನ ಸಿಗುವುದಿಲ್ಲ.

17‘‘ಲೆಬನೋನಿನಲ್ಲಿ ಅನೇಕರನ್ನು ಗಾಯಗೊಳಿ ಸಿದ್ದೀ. ಅಲ್ಲಿ ಎಷ್ಟೋ ಪಶುಗಳನ್ನು ಅಪಹರಿಸಿರುತ್ತೀ. ಆ ದೇಶದಲ್ಲಿ ನೀನು ಮಾಡಿದ ದುಷ್ಕೃತ್ಯಗಳ ನಿಮಿತ್ತ ಅದ ರಿಂದಾಗಿ ಅಲ್ಲಿ ಸತ್ತುಹೋದವರ ನಿಮಿತ್ತ ನೀನು ಭಯ ಗ್ರಸ್ತನಾಗಿರುವಿ. ಅಲ್ಲಿಯ ಪಟ್ಟಣಗಳಿಗೆ ನೀನು ಮಾಡಿದ ಹಾನಿ, ಜನರಿಗೆ ನೀನು ಕೊಟ್ಟ ಸಂಕಟದ ನಿಮಿತ್ತ ನಿನಗೆ ಹೆದರಿಕೆಯುಂಟಾಗಿಯದೆ.’’

### ವಿಗ್ರಹಗಳ ವಿಷಯವಾದ ಸಂದೇಶ

18ಆ ಮನುಷ್ಯನ ಹುಸಿ ದೇವರು ಅವನಿಗೆ ಸಹಾಯ ಮಾಡಲಾರದು. ಯಾಕೆಂದರೆ ಕೆಲವರು ಲೋಹದಿಂದ ಮಾಡಿದ ಕೇವಲ ವಿಗ್ರಹವಷ್ಟೇ ಅದು. ಅದು ಕೇವಲ ಜಡ ಮೂರ್ತಿ. ಅದನ್ನು ಮಾಡಿದವನು ಅದು ಅವನಿಗೆ ಸಹಾಯ ಮಾಡುವದೆಂದು ಯೋಚಿಸುವದು ಶುದ್ಧ ಮೂರ್ಖತನ. ಆ ಮೂರ್ತಿಯು ಮಾತಾಡುವುದೂ ಇಲ್ಲ. 19ಆ ಮೂರ್ತಿಗೆ ‘ಎದ್ದೇಳು’ ಎಂದು ಹೇಳುವವನಿಗೆ ಕೇಡಾಗುವುದು! ಮಾತಾಡಲಾಗದ ಒಂದು ಕಲ್ಲಿಗೆ ‘ಎಚ್ಚರವಾಗು’ ಎಂದು ಹೇಳುವವನಿಗೆ ಕೇಡಾಗುವುದು! ಅವುಗಳು ಅವನಿಗೆ ಸಹಾಯ ಮಾಡುವದಿಲ್ಲ, ಮಾಡಲಿ ಕ್ಕಾಗುವದೂ ಇಲ್ಲ. ಆ ವಿಗ್ರಹಗಳನ್ನು ಬೆಳ್ಳಿ ಬಂಗಾರ ದಿಂದ ಹೊದಿಸಿದರೂ ಆ ವಿಗ್ರಹಗಳಲ್ಲಿ ಜೀವವಿಲ್ಲ.

20ಆದರೆ ಯೆಹೋವನಾದರೋ ಹಾಗಲ್ಲ. ಆತನು ತನ್ನ ಪವಿತ್ರ ಆಲಯದಲ್ಲಿದ್ದಾನೆ. ಆದುದರಿಂದ ಎಲ್ಲಾ ಭೂನಿವಾಸಿಗಳು ಆತನ ಮುಂದೆ ಮೌನದಿಂದಿದ್ದು ಆತನನ್ನು ಗೌರವಿಸತಕ್ಕದ್ದು.

### ಹಬಕ್ಕೂಕನ ಪ್ರಾರ್ಥನೆ

3 ಪ್ರವಾದಿಯಾದ ಹಬಕ್ಕೂಕನ ಪ್ರಾರ್ಥನೆ:

2 ಯೆಹೋವನೇ, ನಾನು ನಿನ್ನ ವಿಚಾರ ಕೇಳಿದೆನು.
ಯೆಹೋವನೇ, ನೀನು ಹಿಂದಿನ ಕಾಲದಲ್ಲಿ
ಮಾಡಿದ ಮಹತ್ಕಾರ್ಯಗಳು ನನ್ನನ್ನು ಚಕಿತಗೊಳಿ
ಸಿದೆ. ನಮ್ಮ ಕಾಲದಲ್ಲಿಯೂ ಮಹಾಕಾರ್ಯಗ
ಳನ್ನು ಮಾಡಬೇಕೆಂದು ಪ್ರಾರ್ಥಿಸುತ್ತೇನೆ. ದಯ
ಮಾಡಿ ಆ ಘಟನೆಗಳು ನಮ್ಮ ದಿವಸಗಳಲ್ಲೂ ನೆರ
ವೇರುವಂತೆ ಮಾಡು. ಅದರ ಜೊತೆಯಲ್ಲಿ ನಮ್ಮ
ಮೇಲೆ ಕರುಣೆ ತೋರಿಸಲು ಮರೆಯಬೇಡ.
3 ತೇಮಾನಿನಿಂದ ಯೆಹೋವನು ಬರುತ್ತಿದ್ದಾನೆ.
ಪರಿಶುದ್ಧನಾದವನು ಪಾರಾನ್ ಪರ್ವತದಿಂದ
ಬರುತ್ತಿದ್ದಾನೆ. ಯೆಹೋವನ ಮಹಿಮೆಯು
ಆಕಾಶಮಂಡಲವನ್ನು ಮುಚ್ಚುತ್ತದೆ. ಅವನ
ಸ್ತೋತ್ರವು ಭೂಲೋಕವನ್ನು ತುಂಬುತ್ತದೆ.
4 ಬೆಳಕಿನ ಕಿರಣಗಳು ಆತನ ಕೈಯಿಂದ ಹೊಳೆಯು
ತ್ತದೆ. ಅದು ಹೊಳೆಯುವಂಥ ಪ್ರಕಾಶಮಾನವಾದ
ಹೊಳಪು. ಆ ಕೈಗಳಲ್ಲಿ ಅಂಥಾ ಶಕ್ತಿಯು ಅಡಕ
ವಾಗಿದೆ.
5 ರೋಗವು ಆತನ ಮುಂದಿನಿಂದ ಹೋಗುತ್ತಿದೆ.
ನಾಶಕನು ಆತನನ್ನು ಹಿಂಬಾಲಿಸುತ್ತಿದ್ದಾನೆ.
6 ಯೆಹೋವನು ನಿಂತು ಪ್ರಪಂಚದ ನ್ಯಾಯ ತೀರಿಸಿ
ದನು. ಎಲ್ಲಾ ಜನಾಂಗಗಳ ಜನರ ಕಡೆಗೆ
ನೋಡಿದನು. ಅವರು ಭಯದಿಂದ ನಡುಗಿದರು.
ತಲಾಂತರಗಳಿಂದ ಪರ್ವತಗಳು ಸ್ಥಿರವಾಗಿ ನಿಂತಿ
ದ್ದವು, ಆದರೆ ಅದೇ ಪರ್ವತಗಳು ತುಂಡು
ತುಂಡಾಗಿ ಬಿದ್ದವು. ಪುರಾತನ ಕಾಲದ ಬೆಟ್ಟಗಳು
ಬಿದ್ದುಹೋದವು. ದೇವರು ಆ ರೀತಿಯಾಗಿ
ಯಾವಾಗಲೂ ಇದ್ದನು.
7 ಕೂಷಾನಿನ ನಗರಗಳು ಸಂಕಟದಲ್ಲಿರುವುದನ್ನು
ಕಂಡೆನು. ಮಿದ್ಯಾನಿನ ಮನೆಗಳು ಹೆದರಿ
ನಡುಗುತ್ತಿದ್ದವು.
8 ಯೆಹೋವನೇ, ನೀನು ನದಿಗಳ ಮೇಲೆ ಕೋಪ
ಗೊಂಡಿದ್ದೀಯೋ? ತೊರೆಗಳ ಮೇಲೆ ನೀನು
ಕೋಪಗೊಂಡಿದ್ದೀಯೋ? ಸಮುದ್ರದ ಮೇಲೆ
ನೀನು ಕೋಪಗೊಂಡಿದ್ದೀಯೋ? ನೀನು ನಿನ್ನ
ಕುದುರೆಗಳ ಮೇಲೆ ಮತ್ತು ರಥಗಳ ಮೇಲೆ ಸವಾರಿ
ಮಾಡಿದಾಗ ಕೋಪಗೊಂಡಿದ್ದೀಯೋ?

9 ಆದಾಗ್ಯೂ ನೀನು ನಿನ್ನ ಮೇಘದ ಬಿಲ್ಲನ್ನು
ತೋರಿಸಿದೆ. ಈ ಲೋಕದ ಮನುಷ್ಯರೊಂದಿಗೆ
ಅದು ನಿನ್ನ ಒಡಂಬಡಿಕೆಯ ಸಾಕ್ಷಿ. ಒಣನೆಲವು
ನದಿಯನ್ನು ಇಬ್ಭಾಗವಾಗ ಮಾಡಿತು.
10 ಪರ್ವತಗಳು ನಿನ್ನನ್ನು ನೋಡಿ ನಡುಗಿದವು. ನೆಲದ
ಮೇಲಿಂದ ನೀರು ಹರಿದುಹೋಯಿತು.
ಭೂಮಿಯ ಮೇಲೆ ತನಗಿದ್ದ ಶಕ್ತಿ ಹೋದುದ್ದನ್ನು
ನೋಡಿ ಸಮುದ್ರವು ಗಟ್ಟಿಯಾಗಿ ಶಬ್ದ ಮಾಡಿತು.
11 ಸೂರ್ಯಚಂದ್ರರು ತಮ್ಮ ಪ್ರಕಾಶವನ್ನು ಕಳ
ಕೊಂಡವು. ನಿನ್ನ ಹೊಳೆಯುವ ಮಿಂಚುಗಳನ್ನು
ನೋಡಿ ಅವು ಪ್ರಕಾಶಿಸುವದನ್ನು ನಿಲ್ಲಿಸಿದವು. ಆ
ಮಿಂಚುಗಳು ಗಾಳಿಯಲ್ಲಿ ತೂರಿಬರುವ ಬರ್ಚಿ,
ಬಾಣಗಳಂತಿದ್ದವು.
12 ‘‘ಸಿಟ್ಟಿನಿಂದ ನೀನು ಭೂಮಿಯ ಮೇಲೆ ನಡೆದೆ.
ಮತ್ತು ಜನಾಂಗಗಳನ್ನು ಶಿಕ್ಷಿಸಿದೆ.
13 ನಿನ್ನ ಜನರನ್ನು ರಕ್ಷಿಸಲು ನೀನು ಬಂದೆ. ನೀನು
ಆರಿಸಿದ್ದ ರಾಜನನ್ನು ಜಯದ ಕಡೆಗೆ ನಡಿಸುವುದ
ಕ್ಕಾಗಿ ಬಂದೆ. ಪ್ರತೀ ದುಷ್ಟ ಕುಟುಂಬದ ನಾಯಕ
ನನ್ನು ನೀನು ಸಂಹರಿಸಿದೆ. ಭೂಲೋಕದಲ್ಲಿದ್ದ
ಪ್ರಮುಖನಿಂದಿಡಿದು ಪ್ರಮುಖನಲ್ಲದವನ
ವರೆಗೂ ನೀನು ಹತಿಸಿದೆ.
14 ವೈರಿಗಳ ಸೈನ್ಯವನ್ನು ಮೋಶೆಯ ಕೋಲಿನಿಂದ ನಿಲ್ಲಿ
ಸಿದೆ. ಆ ಸೈನಿಕರು ಬಿರುಗಾಳಿಯಂತೆ ನಮ್ಮೊಂದಿಗೆ
ಯುದ್ಧ ಮಾಡಲು ಬಂದರು. ರಸ್ತೆಯ ಮೇಲೆ ಇದ್ದ
ಒಬ್ಬ ಬಡ ಮನುಷ್ಯನನ್ನು ದೋಚಿದ ಪ್ರಕಾರ
ನಮ್ಮನ್ನು ಸುಲಭದಲ್ಲಿ ಗೆಲ್ಲುವೆವೆಂದು ಅವರು
ನೆನೆಸಿದ್ದರು.
15 ಆದರೆ ನೀನು ನಿನ್ನ ಕುದುರೆಗಳನ್ನು ಸಮುದ್ರ
ದೊಳಗಿಂದ ನಡಿಸಿದಿ. ಅವುಗಳು ಆ ಮಹಾ
ಸಮುದ್ರವನ್ನು ಕದಡಿಸಿಬಿಟ್ಟವು.
16 ಆ ವಿಷಯವನ್ನು ಕೇಳಿದಾಗ ನನ್ನ ಶರೀರವೆಲ್ಲಾ
ನಡುಗಿತು. ಆಶ್ಚರ್ಯದಿಂದ ನಾನು ಸಿಳ್ಳುಹಾಕಿದೆ.
ನನ್ನ ಎಲುಬುಗಳ ಬಲಹೀನತೆಯಿಂದ ನಾನು
ನಡುಗುವವನಾಗಿ ನಿಂತೆನು. ಅವರು ಜನರ ಮೇಲೆ
ಬೀಳಲು ಬರುವಾಗ ನಾನು ಅವರ ನಾಶನದ ದಿವಸ
ವನ್ನು ಎದುರು ನೋಡುತ್ತಿದ್ದೇನೆ.

### ಯಾವಾಗಲೂ ಯೆಹೋವನಲ್ಲಿ ಸಂತೋಷಿಸು

17 ಅಂಜೂರದ ಮರಗಳಲ್ಲಿ ಅಂಜೂರದ ಹಣ್ಣು
ಬೆಳೆಯದಿದ್ದರೂ, ದ್ರಾಕ್ಷೆಹಣ್ಣುಗಳು ಬಳ್ಳಿಗಳಲ್ಲಿ
ಬೆಳೆಯದಿದ್ದರೂ, ಎಣ್ಣೇ ಮರಗಳಲ್ಲಿ ಆಲೀವ್
ಕಾಯಿಗಳು ಬೆಳೆಯದಿದ್ದರೂ, ಹೊಲದಲ್ಲಿ ಪೈರು
ಬೆಳೆಯದಿದ್ದರೂ ಹಟ್ಟಿಯಲ್ಲಿ ಕುರಿಗಳು
ಯಾವದೂ ಇಲ್ಲದಿದ್ದರೂ ಕೊಟ್ಟಿಗೆಯೊಳಗೆ ಪಶು
ಗಳು ಯಾವದೂ ಇಲ್ಲದಿದ್ದರೂ
18 ನಾನು ಯೆಹೋವನಲ್ಲಿ ಸಂತೋಷಿಸುವೆನು. ನನ್ನ
ರಕ್ಷಕನಾದ ದೇವರಲ್ಲಿ ಸಂತೋಷಪಡುವೆನು.
19 ನನ್ನ ಒಡೆಯನಾದ ಯೆಹೋವನು ನನಗೆ ಬಲ
ವನ್ನು ಕೊಡುವನು. ಜಿಂಕೆಯಂತೆ ವೇಗವಾಗಿ
ಓಡಲು ನನಗೆ ಸಹಾಯ ಮಾಡುವನು. ಪರ್ವತ
ಗಳಲ್ಲಿ ನನ್ನನ್ನು ಸುರಕ್ಷಿತವಾಗಿ ನಡಿಸುವನು.

*ಸಂಗೀತ ನಿರ್ದೇಶಕನಿಗೆ. ತಂತಿ ವಾದ್ಯಗಳಿಂದ ಹಾಡತಕ್ಕದ್ದು.*

# ಚೆಫನ್ಯ

1 ಚೆಫನ್ಯನಿಗೆ ಯೆಹೋವನು ಕೊಟ್ಟ ಸಂದೇಶ.
ಆಮೋನನ ಮಗನಾದ ಯೋಷೀಯನು ಯೆಹೂದ
ಪ್ರಾಂತ್ಯದ ಅರಸನಾಗಿದ್ದಾಗ ಈ ಸಂದೇಶವು ಅವನಿಗೆ
ದೊರಕಿತು. ಚೆಫನ್ಯನು ಕೂಷನ ಮಗನು; ಕೂಷನು
ಗೆದಲ್ಯನ ಮಗನು; ಗೆದಲ್ಯನು ಅಮರ್ಯನ ಮಗನು;
ಅಮರ್ಯನು ಹಿಜ್ಕೀಯನ ಮಗನು.

### ಜನರಿಗೆ ನ್ಯಾಯ ತೀರಿಸುವ ಯೆಹೋವನ ದಿನ

2ಯೆಹೋವನು ಹೇಳುವದೇನೆಂದರೆ, ‘‘ಭೂಲೋಕ
ದಲ್ಲಿರುವದೆಲ್ಲವನ್ನು ನಾನು ನಾಶಮಾಡುತ್ತೇನೆ.
3ಲೋಕದೊಳಗಿರುವ ಎಲ್ಲಾ ಮನುಷ್ಯರನ್ನೂ ಪ್ರಾಣಿ
ಗಳನ್ನೂ ಆಕಾಶದಲ್ಲಿರುವ ಎಲ್ಲಾ ಪಕ್ಷಿಗಳನ್ನೂ ನೀರಿನ
ಲ್ಲಿರುವ ಎಲ್ಲಾ ಮೀನುಗಳನ್ನೂ ನಾನು ನಾಶ
ಮಾಡುವೆನು. ಎಲ್ಲಾ ದುಷ್ಟ ಜನರನ್ನೂ ಮತ್ತು ಅವರನ್ನು
ಪಾಪಕ್ಕೆ ನಡಿಸುವ ಎಲ್ಲಾ ವಸ್ತುಗಳನ್ನೂ* ನಾನು ನಾಶ
ಮಾಡುವೆನು. ಭೂಮಿಯ ಮೇಲಿರುವ ಎಲ್ಲಾ ಜನರನ್ನು
ನಿರ್ಮೂಲ ಮಾಡುವೆನು.’’ ಈ ವಿಷಯಗಳನ್ನು
ಯೆಹೋವನು ತಿಳಿಸಿದನು.

4ಯೆಹೋವನು ಹೀಗೆ ನುಡಿದನು: ‘‘ನಾನು
ಯೆಹೂದವನ್ನೂ, ಜೆರುಸಲೇಮಿನಲ್ಲಿ ವಾಸಿಸುವ ಜನ
ರನ್ನೂ ದಂಡಿಸುವೆನು. ಬಾಳನ ಪೂಜೆಯ ಪ್ರತಿಯೊಂದು
ಚಿಹ್ನೆಯನ್ನೂ ಅದನ್ನು ಪೂಜಿಸುವ ಪುರೋಹಿತರನ್ನೂ
ಮತ್ತು ಯಾವ ಜನರು 5ತಮ್ಮ ಮಾಳಿಗೆಯ ಮೇಲೆ ಹತ್ತಿ
ನಕ್ಷತ್ರಗಳನ್ನು ಆರಾಧಿಸುತ್ತಾರೋ ನಾನು ಅವರನ್ನು
ನಿರ್ಮೂಲ ಮಾಡುತ್ತೇನೆ. ಜನರು ತಮ್ಮ ಸುಳ್ಳು
ಪುರೋಹಿತರನ್ನು ಮರೆತುಬಿಡುವರು. ಕೆಲವರು
ತಮ್ಮನ್ನು ನನ್ನ ಆರಾಧಕರೆಂದು ಹೇಳಿಕೊಳ್ಳುವರು.
ಆದರೆ ಈಗ ಅವರು ಸುಳ್ಳು ದೇವರಾದ ಮಲ್ಕಾಮನನ್ನು
ಆರಾಧಿಸುತ್ತಾರೆ. ಅಂಥವರನ್ನು ಅವರ ಸ್ಥಳಗಳಿಂದ
ತೆಗೆದು ಹಾಕುವೆನು. 6ಕೆಲವರು ಯೆಹೋವನಾದ
ನನ್ನಿಂದ ತೊಲಗಿ ಹೋದರು. ನನ್ನನ್ನು
ಹಿಂಬಾಲಿಸುವುದನ್ನು ನಿಲ್ಲಿಸಿಬಿಟ್ಟರು. ಅವರು
ಯೆಹೋವನನ್ನು ಸಹಾಯಕ್ಕಾಗಿ ಬೇಡುವಂತದ್ದನ್ನು
ನಿಲ್ಲಿಸಿದರು. ಅವರನ್ನು ನಾನು ಅವರ ಸ್ಥಳಗಳಿಂದ
ತೆಗೆದುಹಾಕುವೆನು.’’

7ದೇವರಾದ ಯೆಹೋವನ ಸನ್ನಿಧಿಯಲ್ಲಿ ಮೌನ
ವಾಗಿರ್ರಿ. ಯಾಕೆಂದರೆ ಯೆಹೋವನು ಜನರಿಗೆ ನ್ಯಾಯ
ತೀರಿಸುವ ದಿನವು ಹತ್ತಿರವಾಯಿತು. ಯೆಹೋವನು ತನ್ನ
ಯಜ್ಞವನ್ನು ತಯಾರುಮಾಡಿ ತನ್ನ ಅಮಂತ್ರಿತರನ್ನು
ಸಿದ್ಧವಾಗಿರಲು ಹೇಳಿದ್ದಾನೆ.

8‘‘ಯೆಹೋವನ ಯಜ್ಞದ ದಿನದಲ್ಲಿ ನಾನು ರಾಜ
ಕುಮಾರರನ್ನೂ ಇತರ ನಾಯಕರುಗಳನ್ನೂ ಶಿಕ್ಷಿಸುವೆನು.
ಪರದೇಶದ ಬಟ್ಟೆಯನ್ನು ತೊಟ್ಟುಕೊಳ್ಳುವ ಪ್ರತಿಯೊಬ್ಬ
ರನ್ನೂ ನಾನು ಶಿಕ್ಷಿಸುವೆನು. 9ಆ ಸಮಯದಲ್ಲಿ ಹೊಸ್ತಿ
ಲನ್ನು ಹಾರಿ ತಮ್ಮ ಒಡೆಯರ ಮನೆಯನ್ನು ತಮ್ಮ ಸುಳ್ಳು,
ಮೋಸ, ಹಿಂಸೆಗಳಿಂದ ತುಂಬಿರುವವರನ್ನು ಶಿಕ್ಷಿಸುತ್ತೇನೆ’’
ಎಂದು ಯೆಹೋವನು ನುಡಿಯುತ್ತಾನೆ.

10ಯೆಹೋವನು ಇನ್ನೂ ಹೇಳುವದೇನೆಂದರೆ, ‘‘ಆ
ಸಮಯದಲ್ಲಿ ಜೆರುಸಲೇಮಿನ ಮೀನು ಬಾಗಿಲಲ್ಲಿ
ಜನರು ಸಹಾಯಕ್ಕಾಗಿ ಮೊರೆಯಿಡುವರು. ನಗರದ
ಇತರ ಕಡೆಗಳಿಂದ ಜನರು ರೋಧಿಸುವರು. ನಗರದ
ಸುತ್ತಲಿರುವ ಬೆಟ್ಟಗಳಲ್ಲಿ ನಾಶವಾಗುವ ಶಬ್ದವನ್ನು
ಜನರು ಕೇಳುವರು. 11ನಗರದ ಕೆಳಗಿನ ಭಾಗದಲ್ಲಿರು
ವವರೇ, ನೀವು ಅಳುವಿರಿ. ಯಾಕೆಂದರೆ ನಿಮ್ಮಲ್ಲಿರುವ
ಧನಿಕರೂ ವ್ಯಾಪಾರಸ್ತರೂ ನಾಶವಾಗುವರು.

12‘‘ಆ ಸಮಯಗಳಲ್ಲಿ ನಾನು ದೀಪವನ್ನು ಹಚ್ಚಿ ಜೆರುಸ
ಲೇಮಿನಲ್ಲಿ ಹುಡುಕಾಡುವೆನು. ತಮ್ಮ ಸ್ವಂತ ರೀತಿಯಲ್ಲಿ
ನಡೆದು ತೃಪ್ತಿಯಾಗಿರುವ ಜನರನ್ನು ಕಂಡುಕೊಳ್ಳುವೆನು.
ಅವರು ಹೇಳುವದೇನೆಂದರೆ, ‘ಯೆಹೋವನು ಏನೂ
ಮಾಡುವುದಿಲ್ಲ. ಅವನು ಸಹಾಯವನ್ನೂ ಮಾಡುವು
ದಿಲ್ಲ, ಜನರಿಗೆ ಕೆಡುಕನ್ನೂ ಮಾಡುವುದಿಲ್ಲ.’ ಅಂಥವ
ರನ್ನು ನಾನು ಹಿಡಿದು ಶಿಕ್ಷಿಸುವೆನು. 13ಆಗ ಇತರ ಜನರು
ಬಂದು ಅವರ ಐಶ್ವರ್ಯವನ್ನು ಸುಲುಕೊಂಡು ಅವರ
ಮನೆಯನ್ನು ನಾಶಮಾಡುವರು. ಆ ಸಮಯಗಳಲ್ಲಿ
ಮನೆಕಟ್ಟಿದ ಜನರು ಅದರಲ್ಲಿ ವಾಸ ಮಾಡುವದಿಲ್ಲ.

---

**ವಸ್ತುಗಳನ್ನು** ಬಹುಶಃ, ವಿಗ್ರಹಗಳನ್ನು.

ದ್ರಾಕ್ಷಿ ತೋಟವನ್ನು ನೆಟ್ಟವರು ಅದರ ಹಣ್ಣಿನ ರಸವನ್ನು
ಕುಡಿಯುವುದಿಲ್ಲ. ಬೇರೆಯವರು ಅದನ್ನು ಪಡ
ಕೊಳ್ಳುವರು.''
14ಯೆಹೋವನ ನ್ಯಾಯತೀರ್ಪಿನ ದಿನವು ಬೇಗನೇ
ಬರುತ್ತದೆ; ಅತ್ಯಂತ ವೇಗವಾಗಿ ಬರುತ್ತಿದೆ. ಆ ದಿನದಂದು
ಜನರು ಬಹಳವಾಗಿ ದುಃಖಿಸುವರು. ಧೈರ್ಯಶಾಲಿಗ
ಳಾದ ಸೈನಿಕರೂ ಅಳುವರು. 15ಯೆಹೋವನು ತನ್ನ
ಕೋಪವನ್ನು ಆ ದಿವಸದಲ್ಲಿ ತೋರಿಸುವನು. ಆ ದಿವಸಗ
ಳಲ್ಲಿ ಮಹಾ ಸಂಕಟಗಳಿರುವದು. ಅದು ನಾಶನದ ದಿವಸ
ಗಳಾಗಿರುವವು. ಆ ದಿವಸವು ಕತ್ತಲು, ಕಾರ್ಮುಗಿಲು
ಕವಿದ ಬಿರುಗಾಳಿಯ ದಿವಸವಾಗಿರುವದು. 16ಅದು
ಒಂದು ಯುದ್ಧದ ದಿವಸದಂತಿರುವುದು; ಎಲ್ಲೆಲ್ಲೂ
ಕೊಂಬು, ತುತ್ತೂರಿಗಳ ಧ್ವನಿಗಳನ್ನು ಜನರು ಬುರುಜು,
ಕೊತ್ತಲಗಳಿಂದ ಕೇಳಿಸಿಕೊಳ್ಳುವರು.
17ಯೆಹೋವನು ಹೇಳುವದೇನೆಂದರೆ, ''ಜನರ
ಜೀವನವನ್ನು ನಾನು ಬಹು ಕಷ್ಟಕರವಾಗಿ ಮಾಡುವೆನು.
ಅವರು ಕುರುಡರಂತೆ ಅತ್ತಿತ್ತ ತೊಳಲಾಡುವರು. ತಾವು
ಎತ್ತ ಹೋಗುತ್ತಿದ್ದಾರೆಂದು ಅವರಿಗೆ ತಿಳಿಯದು.
ಯಾಕೆಂದರೆ ಯೆಹೋವನಿಗೆ ವಿರುದ್ಧವಾಗಿ ಪಾಪ
ಮಾಡಿದ್ದಾರೆ. ಅನೇಕ ಮಂದಿ ಕೊಲ್ಲಲ್ಪಡುವರು. ಅವರ
ರಕ್ತವು ಭೂಮಿಗೆ ಸುರಿಯಲ್ಪಡುವದು. ಅವರ ಹೆಣಗಳು
ಮಲದ ಹಾಗೆ ನೆಲದಲ್ಲಿ ಬೀಳುವವು. 18ಅವರ ಬೆಳ್ಳಿ
ಬಂಗಾರಗಳು ಅವರ ಸಹಾಯಕ್ಕೆ ಬಾರವು. ಆ ಸಮಯ
ದಲ್ಲಿ ಯೆಹೋವನು ಕೋಪಾಗ್ನಿಯಿಂದ ತುಂಬಿದವ
ನಾಗು ಯೆಹೋವನು ಇಡೀ ಪ್ರಪಂಚವನ್ನೇ ನಾಶ
ಮಾಡುವನು. ಭೂಮಿಯ ಮೇಲಿರುವ ಪ್ರತಿಯೊಬ್ಬ
ನನ್ನು ಯೆಹೋವನು ಸಂಪೂರ್ಣವಾಗಿ ನಾಶ
ಮಾಡುವನು.''

### ಜನರ ಜೀವಿತವನ್ನು ಮಾರ್ಪಡಿಸಲು ದೇವರ ಕರೆ

2 ನಾಚಿಕೆಗೆಟ್ಟವರೇ, ನಿಮ್ಮ ಜೀವಿತವನ್ನು ಬದಲಾಯಿ
ಸಿರಿ. 2ನೀವು ಒಣಗಿ, ಸತ್ತ ಹೂವಿನೋಪಾದಿ
ಯಾಗುವ ಮೊದಲೇ ನಿಮ್ಮ ಜೀವಿತವನ್ನು ಮಾರ್ಪಡಿಸಿರಿ.
ಬಿಸಿಲೇರಿದಾಗ ಹೂವು ಬಾಡಿಹೋಗಿ ಒಣಗುತ್ತದೆ.
ಅದೇ ಪ್ರಕಾರ ಯೆಹೋವನು ತನ್ನ ಕೋಪವನ್ನು ಪ್ರದರ್ಶಿ
ಸುವಾಗ ನೀವು ಹಾಗೆ ಆಗುವಿರಿ. ಆದುದರಿಂದ ಯೆಹೋ
ವನ ಕೋಪದ ದಿನವು ನಿಮ್ಮ ಮೇಲೆ ಬರುವುದಕ್ಕಿಂತ
ಮೊದಲೇ ನಿಮ್ಮ ಜೀವಿತವನ್ನು ಬದಲಾಯಿಸಿರಿ.
3ದೀನರೇ, ಯೆಹೋವನ ಬಳಿಗೆ ಬನ್ನಿರಿ. ಆವನ ನಿಯಮ
ಗಳಿಗೆ ಒಳಗಾಗಿರಿ, ಒಳ್ಳೇದನ್ನು ಮಾಡಿರಿ, ದೀನರಾಗಿರಿ.
ಯೆಹೋವನು ತನ್ನ ಕೋಪಾಗ್ನಿಯನ್ನು ಪ್ರದರ್ಶಿಸುವ
ದಿವಸದಲ್ಲಿ ನೀವು ರಕ್ಷಿಸಲ್ಪಡಬಹುದು.

### ಇಸ್ರೇಲರ ನೆರೆಯವರನ್ನು ಯೆಹೋವನು ಶಿಕ್ಷಿಸುವನು

4ಗಾಜದಲ್ಲಿ ಯಾರೂ ಉಳಿಯರು. ಅಷ್ಕೆಲೋನ್
ನಾಶವಾಗುವದು. ಮಧ್ಯಾಹ್ನದೊಳಗಾಗಿ ಅಷ್ಡೋದನ್ನು
ಬಿಟ್ಟುಹೋಗುವಂತೆ ಬಲವಂತ ಮಾಡಲಾಗುವುದು.
ಎಕ್ರೋನ್ ನಿರ್ಜನವಾಗುವದು. 5ಫಿಲಿಷ್ಟಿಯ ಜನರೇ,
ಕರಾವಳಿ ಪ್ರದೇಶದಲ್ಲಿ ವಾಸಿಸುವ ಜನರೇ, ಯೆಹೋವ
ನಿಂದ ಬಂದ ಸಂದೇಶ ನಿಮಗಾಗಿಯೇ. ಕಾನಾನ್
ದೇಶವೇ, ಪಾಲೆಸ್ತೀನ್ ದೇಶವೇ, ನೀವು ನಾಶಗೊಳ್ಳು
ವಿರಿ. ನಿಮ್ಮಲ್ಲಿ ಯಾರೂ ವಾಸಿಸರು. 6ಕರಾವಳಿಯಲ್ಲಿ
ರುವ ನಿಮ್ಮ ಪ್ರಾಂತ್ಯವು ಕುರುಬರಿಗೆ ತಮ್ಮ ಕುರಿಗಳನ್ನು
ಮೇಯಿಸುವ ಬಯಲಾಗುವದು. 7ಆ ದೇಶವು
ಯೆಹೂದದಲ್ಲಿ ಅಳಿದುಳಿದವರಿಗೆ ಆಗುವದು.
ಯೆಹೂದದಲ್ಲಿರುವ ಜನರನ್ನು ಯೆಹೋವನು ನೆನಪು
ಮಾಡುವನು. ಅವರು ಸೆರೆಯಾಳಾಗಿ ಅನ್ಯದೇಶ
ದಲ್ಲಿರುವರು. ಆದರೆ ಯೆಹೋವನು ಅವರನ್ನು ಹಿಂದಕ್ಕೆ
ತರುವನು. ಆಗ ಯೆಹೂದದ ಜನರು ಆ ಬಯಲಿನಲ್ಲಿ
ತಮ್ಮ ಕುರಿ ಮಂದೆಗಳನ್ನು ಮೇಯಿಸುವರು. ಸಾಯಂ
ಕಾಲ ಬರಿದಾದ ಅಷ್ಕೆಲೋನಿನ ಮನೆಗಳಲ್ಲಿ ತಂಗುವರು.
8ಯೆಹೋವನು ಇಂತೆನ್ನುತ್ತಾನೆ, ''ಮೋವಾಬ್ಯರೂ
ಅಮ್ಮೋನ್ಯರೂ ಏನು ಮಾಡಿದ್ದಾರೆಂದು ನನಗೆ ಗೊತ್ತಿದೆ.
ಅವರು ನನ್ನ ಜನರನ್ನೂ ಕೆಣಕಿದರು. ಅವರ ಪ್ರದೇಶ
ಗಳನ್ನು ಎಳೆದುಕೊಂಡು ತಮ್ಮ ರಾಜ್ಯಗಳನ್ನು ವಿಸ್ತರಿಸಿ
ದರು. 9ನನ್ನ ಜೀವದಾಣೆ, ಮೋವಾಬ್ಯರೂ ಅಮ್ಮೋ
ನ್ಯರೂ ಸೋದೋಮ್ ಗೊಮೋರದವರಂತೆ ನಾಶ
ವಾಗುವರು. ನಾನು ಸರ್ವಶಕ್ತನಾದ ಇಸ್ರೇಲರ ದೇವ
ರಾಗಿರುವೆನು. ನಾನು ವಾಗ್ದಾನ ಮಾಡುವದೇನೆಂದರೆ,
ಆ ರಾಜ್ಯಗಳೂ ಸಂಪೂರ್ಣವಾಗಿ ನಾಶವಾಗುವವು. ಅವರ
ಭೂಮಿಯು ಕಳೆಗಳಿಂದ ತುಂಬಿ ಹೋಗುವವು. ಮೃತ್ಯು
ಸಮುದ್ರದಲ್ಲಿ ಲವಣ ಹೇಗೆ ತುಂಬಿರುತ್ತದೋ, ಅದೇ
ರೀತಿಯಾಗಿ ಅವರ ದೇಶವು ಉಪ್ಪಿನಿಂದ ತುಂಬಿರುವವು.
ನನ್ನ ಜನರಲ್ಲಿ ಉಳಿದವರು ಅವರ ದೇಶವನ್ನೂ ಅಲ್ಲಿ
ಉಳಿದಿರುವ ವಸ್ತುಗಳನ್ನೂ ತಮ್ಮ ವಶಮಾಡಿ
ಕೊಳ್ಳುವರು.''
10ಸರ್ವಶಕ್ತನಾದ ಯೆಹೋವನ ಜನರನ್ನು ಮೋವಾ
ಬ್ಯರು ಮತ್ತು ಅಮ್ಮೋನ್ಯರು ಕ್ರೂರವಾಗಿ ಕಂಡು
ಅವರನ್ನು ಪರಿಹಾಸ್ಯ ಮಾಡಿದ್ದರಿಂದಲೂ, ಅವರು
ತುಂಬಾ ಅಹಂಕಾರದಿಂದ ತುಂಬಿದ್ದರಿಂದಲೂ ಈ
ಸಂಗತಿಗಳು ಅವರಲ್ಲಿ ನೆರವೇರುವದು. 11ಅವರು
ಯೆಹೋವನಿಗೆ ಭಯಪಡುವರು. ಯಾಕೆಂದರೆ ಆತನು
ಅವರ ದೇವರುಗಳನ್ನು ನಾಶಮಾಡಿದ್ದಾನೆ. ಆಗ ದೂರದ
ಲ್ಲಿರುವ ಜನರೆಲ್ಲರೂ ಆತನನ್ನು ಆರಾಧಿಸುವರು.
12ಇಥಿಯೋಪ್ಯದ ಜನರೇ, ಇದರಲ್ಲಿ ನೀವೂ

ಸೇರಿರುವಿರಿ. ಯೆಹೋವನ ಕತ್ತಿಯು ನಿಮ್ಮ ಜನರೆ
ಲ್ಲರನ್ನು ಕೊಲ್ಲುವದು. 13ದೇವರು ಆಮೇಲೆ ಉತ್ತರಕ್ಕೆ
ಮುಖ ಮಾಡಿ ಅಶ್ಶೂರವನ್ನು ಶಿಕ್ಷಿಸುವನು. ಅವನು ನಿನೆವೆ
ಪಟ್ಟಣವನ್ನು ಶಿಕ್ಷಿಸಿದಾಗ ಅದು ನಿರ್ಜನವಾದ ಮರು
ಭೂಮಿಯಾಗುವದು. 14ಆಮೇಲೆ ಆ ಹಾಳುಬಿದ್ದ ನಗರ
ದಲ್ಲಿ ಕಾಡು ಪ್ರಾಣಿಗಳೂ ಕುರಿಗಳೂ ವಾಸಮಾಡುವವು.
ಕಾಗೆಗಳೂ, ಗೂಬೆಗಳೂ ಪಟ್ಟಣದ ಸ್ಥಂಭಗಳ ಮೇಲೆ
ಕುಳಿತುಕೊಂಡು ಒಂದನ್ನೊಂದು ಕರೆಯುವವು. ಬಾಗಿಲ
ಹೊಸ್ತಿಲಲ್ಲಿ ಕಾಗೆಗಳು, ಕುಳಿತುಕೊಳ್ಳುವವು. ಕರೀ
ಪಕ್ಷಿಗಳು ನಿರ್ಜನವಾದ ಮನೆಗಳ ಮೇಲೆ ಕುಳಿತು
ಕೊಳ್ಳುವವು. 15ಈ ನಿನೆವೆಯು ಸಂತೋಷಭರಿತ ನಗರಿ
ಯಾಗಿದೆ. ಅದರ ನಿವಾಸಿಗಳು ತಾವು ಸುರಕ್ಷಿತರಾಗಿದ್ದೇ
ವೆಂದು ತಿಳಿದಿದ್ದಾರೆ. ನಿನೆವೆಯು ಲೋಕದಲ್ಲಿ ಅತ್ಯಂತ
ಮಹತ್ವಪೂರ್ಣ ಸ್ಥಳವೆಂದು ತಿಳಿದಿದ್ದಾರೆ. ಅವರು ಬಹಳ
ಗರ್ವಪಡುತ್ತಾರೆ. ಆದರೆ ಆ ನಗರವು ನಾಶವಾಗುವದು.
ಕಾಡುಮೃಗಗಳ ಹಕ್ಕೆಯಾಗುವದು. ದಾಟಿಹೋಗುವ
ಜನರು, ತಮ್ಮ ಆಶ್ಚರ್ಯವನ್ನು ಸಿಳ್ಳು ಹಾಕಿ ತಲೆಯಾಡಿಸಿ
‘‘ಎಂಥಾ ದುರ್ಗತಿ’’ ಎಂದು ಉದ್ಗರಿಸುವರು.

## ಜೆರುಸಲೇಮಿನ ಭವಿಷ್ಯ

3 ಜೆರುಸಲೇಮೇ, ನಿನ್ನ ಜನರು ದೇವರಿಗೆ ವಿರುದ್ಧ
ವಾಗಿ ನಡೆದರು. ಇತರರನ್ನು ಹಿಂಸಿಸಿದರು ಮತ್ತು
ಪಾಪದಿಂದ ಮಲಿನರಾದರು. 2ನಿನ್ನ ಜನರು ನನ್ನ ಮಾತು
ಗಳನ್ನು ಕೇಳಲಿಲ್ಲ. ನನ್ನ ಭೋಧನೆಯನ್ನು ಸ್ವೀಕರಿಸಲಿಲ್ಲ.
ಜೆರುಸಲೇಮ್ ದೇವರ ಮೇಲೆ ಭರವಸವಿಡಲಿಲ್ಲ. ಆತನ
ಬಳಿಗೆ ಹೋಗಲಿಲ್ಲ. 3ಜೆರುಸಲೇಮಿನ ನಾಯಕರು
ಗರ್ಜಿಸುವ ಸಿಂಹದಂತೆ ಇದ್ದಾರೆ, ಅವರ ನ್ಯಾಯಾಧಿ
ಪತಿಗಳು ರಾತ್ರಿ ಕಾಲದಲ್ಲಿ ಕುರಿಗಳ ಮೇಲೆ ಬೀಳುವ
ಹಸಿದ ತೋಳಗಳಂತಿದ್ದಾರೆ. ಬೆಳಗಾಗಲು, ಏನೂ
ಉಳಿಯುವದಿಲ್ಲ. 4ಅವರ ಪ್ರವಾದಿಗಳು ಯಾವಾಗಲೂ
ಇನ್ನೂಇನ್ನೂ ಹೆಚ್ಚಾಗಿ ದೊರಕುವಂತೆ ಪ್ರಯತ್ನಿಸಿರು
ತ್ತಾರೆ. ಅವರ ಯಾಜಕರು ಪವಿತ್ರ ವಸ್ತುಗಳನ್ನು ಸಾಧಾ
ರಣ ವಸ್ತುಗಳನ್ನಾಗಿ ಉಪಯೋಗಿಸಿದ್ದಾರೆ. ದೇವರ
ನಿಯಮಗಳನ್ನು ನಿರ್ಲಕ್ಷಿಸಿದ್ದಾರೆ. 5ಆದರೆ ದೇವರು
ಇನ್ನೂ ಆ ನಗರದಲ್ಲಿದ್ದಾನೆ. ಅವರಿಗೆ ಇನ್ನೂ ಒಳ್ಳೇದನ್ನೇ
ಮಾಡುತ್ತಿದ್ದಾನೆ. ಆತನು ತಪ್ಪು ಕಾರ್ಯಗಳನ್ನು ಮಾಡುವ
ವನಲ್ಲ. ತನ್ನ ಜನರಿಗೆ ಸಹಾಯ ಮಾಡುತ್ತಿರುತ್ತಾನೆ. ಪ್ರತಿ
ದಿನವೂ ಸರಿಯಾದ ತೀರ್ಮಾನ ಮಾಡಲು ತನ್ನ ಜನರಿಗೆ
ಸಹಾಯ ಮಾಡುತ್ತಾನೆ. ಆದರೆ ಆ ದುಷ್ಟಜನರು ತಮ್ಮ
ದುಷ್ಟತನಕ್ಕಾಗಿ ನಾಚಿಕೆಪಡುತ್ತಿಲ್ಲ.

6ದೇವರು ಇಂತೆನ್ನುತ್ತಾನೆ, ‘‘ನಾನು ಇಡೀ ಜನಾಂಗಗ
ಳನ್ನು ನಾಶಮಾಡಿದ್ದೇನೆ. ಅವರ ಬುರುಜುಗಳನ್ನು ನಾಶ
ಮಾಡಿ, ಅವರ ರಸ್ತೆಗಳಲ್ಲಿ ಯಾರೂ ನಡೆಯದ ಹಾಗೆ
ಮಾಡಿರುತ್ತೇನೆ. ಅವರ ನಗರಗಳು ನಿರ್ಜನವಾಗಿವೆ.
ಯಾರೂ ಅಲ್ಲಿ ವಾಸಮಾಡುವದಿಲ್ಲ. 7ನೀವು ಇದರಿಂದ
ಪಾಠ ಕಲಿಯಬೇಕೆಂದು ಇದನ್ನೆಲ್ಲಾ ಹೇಳುತ್ತಿದ್ದೇನೆ.
ನೀನು ನನ್ನನ್ನು ಗೌರವಿಸಿ ನನಗೆ ಭಯಪಡಬೇಕೆಂದು
ನಾನು ಈ ವಿಷಯಗಳನ್ನು ತಿಳಿಸುತ್ತಿದ್ದೇನೆ. ನೀನು ಹೀಗೆ
ಮಾಡುವದಾದರೆ ನಿನ್ನ ಮನೆಯು ನಾಶವಾಗದು. ನೀನು
ನನ್ನ ನಿಯಮಗಳನ್ನು ಅನುಸರಿಸುವದಾದರೆ ನಾನು
ಆಲೋಚಿಸಿರುವ ಪ್ರಕಾರ ನಿನ್ನನ್ನು ಶಿಕ್ಷಿಸುವದಿಲ್ಲ.’’
ಆದರೆ ಆ ದುಷ್ಟ ಜನರು ತಮ್ಮ ಮಾರ್ಗವನ್ನು ಬಿಡದೆ
ದುಷ್ಟತನದಲ್ಲಿಯೇ ಮುಂದುವರಿಯುತ್ತಿದ್ದಾರೆ.

8ಯೆಹೋವನು ಹೀಗೆ ಹೇಳುತ್ತಾನೆ: ‘‘ನನ್ನನ್ನು ಕಾದು
ಕೊಂಡಿರಿ. ನೀವು ನನ್ನ ನ್ಯಾಯತೀರ್ಪಿನ ತನಕ ಕಾದು
ಕೊಂಡಿರಿ. ನಾನು ಬೇರೆ ಜನಾಂಗಗಳನ್ನು ಇಲ್ಲಿಗೆ ಕರೆದು
ನಿಮ್ಮನ್ನು ಶಿಕ್ಷಿಸುವಂತೆ ಮಾಡುವ ಹಕ್ಕು ನನಗಿದೆ. ನಿಮ್ಮ
ಮೇಲೆ ನನಗಿರುವ ಸಿಟ್ಟು ತೋರಿಸಲು ನಾನು ಆ
ಜನಾಂಗಗಳನ್ನು ಉಪಯೋಗಿಸುವೆನು. ನಿಮ್ಮ ಮೇಲೆ
ನಾನು ಎಷ್ಟರಮಟ್ಟಿಗೆ ಕೋಪಗೊಂಡಿದ್ದೇನೆ ಎಂದು
ಅವರ ಮೂಲಕ ನಿಮಗೆ ತಿಳಿದು ಬರುವದು. ಆಗ ಇಡೀ
ದೇಶವೇ ನಾಶವಾಗುವದು. 9ಆಗ ನಾನು ಇತರ
ಜನಾಂಗಗಳವರ ಭಾಷೆಯನ್ನು ಬದಲಾಯಿಸಿ ದೇವ
ರಾದ ಯೆಹೋವನ ನಾಮವನ್ನು ಉಚ್ಚರಿಸುವಂತೆ
ಮಾಡುವೆನು. ಅವರೆಲ್ಲರೂ ನನ್ನನ್ನು ಆರಾಧಿಸುವರು.
ಒಟ್ಟಾಗಿ ಸೇರಿ ಒಂದೇ ಜನಾಂಗವಾಗಿ ನನ್ನನ್ನು ಆರಾಧಿಸು
ವರು. 10ಇಥಿಯೋಪ್ಯದಲ್ಲಿ ನದಿಯ ಆಚೆ ದಡದವರೆಗೂ
ಜನರು ಬರುವರು. ನನ್ನಿಂದ ಚದರಿ ಹೋಗಿದ್ದ ಜನರು
ನನ್ನ ಬಳಿಗೆ ಬರುವರು. ನನ್ನನ್ನು ಆರಾಧಿಸಲು ಬರು
ವವರು ನನಗೆ ಕಾಣಿಕೆಗಳನ್ನು ತರುವರು.

11‘‘ಆಗ ಜೆರುಸಲೇಮೇ, ನಿನ್ನ ಜನರು ನನಗೆ ವಿರುದ್ಧ
ವಾಗಿ ಮಾಡಿದ ದುಷ್ಟಕಾರ್ಯಗಳಿಗಾಗಿ ನೀನು ನಾಚಿಕೆ
ಪಡುವದಿಲ್ಲ. ಯಾಕೆಂದರೆ ನಾನು ಆ ದುಷ್ಟ ಜನರನ್ನೆಲ್ಲಾ
ನಿರ್ಮೂಲ ಮಾಡುವೆನು. ಅಹಂಕಾರ ತುಂಬಿದ ಜನ
ರನ್ನು ನಾನು ತೆಗೆದುಬಿಡುವೆನು. ನನ್ನ ಪವಿತ್ರ ಪರ್ವತದಲ್ಲಿ
ಗರ್ವವುಳ್ಳವರು ಯಾರೂ ಇರುವದಿಲ್ಲ. 12ನನ್ನ ಪಟ್ಟಣ
ದೊಳಗೆ ಬರೇ ದೀನದರಿದ್ರರೇ ವಾಸಮಾಡುವರು.
ಅವರು ಯೆಹೋವನ ಹೆಸರಿನಲ್ಲಿ ಭರವಸೆ ಇಡುವವ
ರಾಗಿರುವರು.

13ಇಸ್ರೇಲಿನಲ್ಲಿ ಉಳಿದವರು ದುಷ್ಟ ಕಾರ್ಯಗಳನ್ನು
ಮಾಡರು. ಸುಳ್ಳು ಹೇಳುವದಿಲ್ಲ. ಜನರನ್ನು ಮೋಸ
ಗೊಳಿಸುವದಿಲ್ಲ. ಅವರು ಕುರಿಗಳಂತೆ ಮೇದು ವಿಶ್ರಾಂತಿ
ತೆಗೆದುಕೊಳ್ಳುವರು. ಯಾರೂ ಅವರ ಗೊಡವೆಗೆ
ಹೋಗರು.’’

**ಸಂತಸದ ಹಾಡು**

14 ಜೆರುಸಲೇಮೇ, ಹಾಡುತ್ತಾ ಸಂತೋಷಿಸುತ್ತಿರು.
ಇಸ್ರೇಲೇ, ಸಂತೋಷದಿಂದ ಆರ್ಭಟಿಸು. ಜೆರುಸ
ಲೇಮೇ, ಸಂತೋಷದಿಂದಿದ್ದು ಉಲ್ಲಾಸಿಸು.
15 ಯಾಕೆಂದರೆ ನಿನ್ನ ಯೆಹೋವನು ನಿನ್ನ ಶಿಕ್ಷೆಯನ್ನು
ನಿಲ್ಲಿಸಿದ್ದಾನೆ. ನಿನ್ನ ವೈರಿಗಳ ಬಲವಾದ ಬುರುಜು
ಗಳನ್ನು ನಾಶಮಾಡಿದ್ದಾನೆ. ಇಸ್ರೇಲಿನ ರಾಜನೇ,
ನಿನ್ನ ದೇವರು ನಿನ್ನೊಂದಿಗಿದ್ದಾನೆ. ನಿನಗೆ ಕೆಟ್ಟದ್ದು
ಸಂಭವಿಸುತ್ತದೆಂದು ನೀನು ಚಿಂತಿಸದಿರು.
16 ಆ ಸಮಯದಲ್ಲಿ ಜೆರುಸಲೇಮಿಗೆ, ‘‘ಬಲ ವಾಗಿರು!
ಭಯಪಡದಿರು!’’ ಎಂದು ಹೇಳ ಲಾಗುವುದು.

17 ‘‘ನಿನ್ನ ದೇವರಾದ ಯೆಹೋವನು ನಿನ್ನೊಂದಿ
ಗಿದ್ದಾನೆ. ಆತನು ರಣಶೂರನು. ನಿನ್ನನ್ನು ರಕ್ಷಿಸಿ
ನಿನ್ನ ಮೇಲಿನ ತನ್ನ ಪ್ರೀತಿಯನ್ನು ತೋರ್ಪಡಿಸು
ವನು. ನಿನ್ನೊಂದಿಗೆ ಎಷ್ಟು ಸಂತೋಷದಲ್ಲಿರುವ
ನೆಂದು ತೋರಿಸುವನು. ನಿನ್ನೊಂದಿಗೆ ನಗಾಡುತ್ತಾ
ಹರ್ಷಿಸುವನು.’’
18 ‘‘ನಿನ್ನ ನಾಚಿಕೆಯನ್ನು ತೆಗೆದುಬಿಡುವೆನು. ನಿನ್ನನ್ನು
ಹಿಂಸಿಸುವ ಜನರನ್ನು ನಿಲ್ಲಿಸುವೆನು.
19 ಆ ಸಮಯದಲ್ಲಿ, ನಿನಗೆ ಕೇಡು ಮಾಡುವವರನ್ನು
ಶಿಕ್ಷಿಸುವೆನು. ಗಾಯಗೊಂಡಿರುವ ನಿನ್ನ ಜನರನ್ನು
ರಕ್ಷಿಸುವೆನು. ತಮ್ಮ ದೇಶದಿಂದ ದೂರಕ್ಕೆ ಚದರಿ
ಸಲ್ಪಟ್ಟ ಜನರನ್ನು ನಾನು ಹಿಂದಕ್ಕೆ ಕರಕೊಂಡು
ಬರುವೆನು. ನಾನು ಅವರನ್ನು ಪ್ರಸಿದ್ಧಿ ಪಡಿಸುವೆನು.
ಎಲ್ಲಾ ಜನರು ಅವರನ್ನು ಹೊಗಳುವರು.
20 ಆಗ ನಿಮ್ಮೆಲ್ಲರನ್ನು ನಾನು ಹಿಂದಕ್ಕೆ ಕರೆತರುವೆನು.
ನಿನ್ನನ್ನು ಪ್ರಸಿದ್ಧಿಪಡಿಸುವೆನು. ಎಲ್ಲಾ ಜನರು
ನಿನ್ನನ್ನು ಹೊಗಳುವರು. ನಿನ್ನ ಕಣ್ಣೆದುರಿಗೇ ಸೆರೆ
ಹಿಡಿದವರನ್ನು ಕರೆತರುವಾಗ ಹಾಗೆ ಆಗುವದು’’
ಎಂದು ದೇವರಾದ ಯೆಹೋವನು ಅನ್ನುತ್ತಾನೆ.

# ಹಗ್ಗಾಯ

### ಆಲಯವನ್ನು ಕಟ್ಟಲು ಇದೇ ಸಮಯ

1 ಪರ್ಶಿಯಾದ ರಾಜನಾದ ದಾರ್ಯಾವೇಷನ
ಆಳ್ವಿಕೆಯ ಎರಡನೇ ವರ್ಷದ, ಆರನೇ ತಿಂಗಳಿನ
ಮೊದಲನೇ ದಿವಸದಲ್ಲಿ ಹಗ್ಗಾಯನಿಗೆ ಯೆಹೋವನಿಂದ
ಸಂದೇಶವು ಬಂದಿತು. ಈ ಸಂದೇಶವು ಶೆಯಲ್ತೀಯೇ
ಲನ ಮಗನಾದ ಜೆರುಬ್ಬಾಬೆಲನಿಗೋಸ್ಕರ, ಯೆಹೋ
ಚಾದಾಕನ ಮಗನಾದ ಯೆಹೋಶುವನಿಗೋಸ್ಕರ
ಬಂದಿತು. ಜೆರುಬ್ಬಾಬೆಲನು ಯೆಹೂದ ಪ್ರಾಂತ್ಯದ ರಾಜ್ಯ
ಪಾಲನಾಗಿದ್ದನು; ಯೆಹೋಶುವನು ಪ್ರಧಾನ ಯಾಜಕ
ನಾಗಿದ್ದನು. ಸಂದೇಶವು ಇದೇ:
2 ಸರ್ವಶಕ್ತನಾದ ಯೆಹೋವನು ಹೇಳುವುದೇನೆಂದರೆ,
‘‘ಆಲಯವನ್ನು ಕಟ್ಟಲು ಇದು ಸರಿಯಾದ ಸಮಯವಲ್ಲ
ವೆಂದು ಜನರು ಹೇಳುತ್ತಿದ್ದಾರೆ.’’
3 ಹಗ್ಗಾಯನಿಗೆ ಮತ್ತೆ ಯೆಹೋವನಿಂದ ಸಂದೇಶವು
ಬಂದಿತು. ಹಗ್ಗಾಯನು ಈ ಸಂದೇಶವನ್ನು ತಿಳಿಸಿದನು:
4 ‘‘ಜನರೇ, ನೀವು ಅಂದವಾದ ಮನೆಗಳಲ್ಲಿ ವಾಸ
ಮಾಡಲು ಇದು ತಕ್ಕ ಸಮಯವೆಂದು ಹೇಳುತ್ತೀರಿ. ನಿಮ್ಮ
ಮನೆಗಳಲ್ಲಿ ಗೋಡೆಗೆ ಮರದ ಹಲಗೆಗಳನ್ನು ಹೊಡೆದಿ
ದ್ದೀರಿ. ಆದರೆ ಯೆಹೋವನ ಮನೆಯು ಇನ್ನೂ ಹಾಳು
ಬಿದ್ದಿದೆ. 5 ಸರ್ವಶಕ್ತನಾದ ಯೆಹೋವನು ಹೇಳುವುದೇ
ನೆಂದರೆ, ‘ಏನು ನಡೆಯುತ್ತಿದೆಂಬುದರ ಬಗ್ಗೆ
ಯೋಚಿಸಿರಿ. 6 ನೀವು ಬಹಳ ಬೀಜವನ್ನು ಭೂಮಿಯಲ್ಲಿ
ಬಿತ್ತಿದ್ದರೂ ಸ್ವಲ್ಪವೇ ಪೈರನ್ನು ಕೊಯ್ದಿದ್ದೀರಿ. ನಿಮಗೆ
ಊಟಮಾಡಲು ಆಹಾರವಿದ್ದರೂ ತೃಪ್ತಿಯಾಗುವಷ್ಟಿಲ್ಲ.
ನಿಮ್ಮಲ್ಲಿ ಕುಡಿಯಲು ಸ್ವಲ್ಪ ಪಾನೀಯವಿದ್ದರೂ ಕುಡಿದು
ಅಮಲೇರುವಷ್ಟು ಇಲ್ಲ. ನಿಮ್ಮಲ್ಲಿ ತೊಟ್ಟುಕೊಳ್ಳಲು ಸ್ವಲ್ಪ
ಬಟ್ಟೆಯಿದ್ದರೂ ನಿಮ್ಮನ್ನು ಬೆಚ್ಚಗಿಟ್ಟುಕೊಳ್ಳುವಷ್ಟು ಇಲ್ಲ.
ನೀವು ಸ್ವಲ್ಪ ಹಣ ಸಂಪಾದನೆ ಮಾಡಿದರೂ ಅದು ಹೇಗೆ
ಖರ್ಚಾಗುತ್ತದೋ ನಿಮಗೆ ತಿಳಿಯುವುದಿಲ್ಲ. ನಿಮ್ಮ
ಜೇಬಿಗೆ ತೂತು ಇದೆಯೋ ಎಂಬಂತೆ ಅದು
ಖರ್ಚಾಗುತ್ತದೆ.’’’
7 ಸರ್ವಶಕ್ತನಾದ ಯೆಹೋವನು ಹೇಳುವದೇನಂದರೆ,
‘‘ನೀನು ಮಾಡುತ್ತಿರುವುದನ್ನು ಯೋಚಿಸು! 8 ಬೆಟ್ಟಗಳ
ಮೇಲಕ್ಕೆ ಹೋಗಿ ಮರವನ್ನು ತಂದು ನನಗೆ ಆಲಯವನ್ನು
ಕಟ್ಟು. ಆಗ ನಾನು ನನ್ನ ನಿವಾಸದಲ್ಲಿ ಸಂತೋಷಿಸುವೆನು.
ಆಗ ನಾನು ಗೌರವಿಸಲ್ಪಡುವೆನು.’’ ಯೆಹೋವನು ಈ
ಸಂಗತಿಗಳನ್ನು ಹೇಳಿದ್ದಾನೆ.
9 ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
‘‘ನೀವು ದೊಡ್ಡ ಸುಗ್ಗಿಯನ್ನು ಎದುರು ನೋಡುತ್ತಿದ್ದೀರಿ.
ಆದರೆ ನೀವು ಪೈರು ಕೊಯ್ಯಲು ಹೋಗುವಾಗ ಸ್ವಲ್ಪವೇ
ಕಾಳು ಇರುವುದು. ಅದನ್ನು ನೀವು ಮನೆಗೆ ತಂದಾಗ
ನಾನು ಗಾಳಿಯನ್ನು ಕಳುಹಿಸಿ ಅವುಗಳನ್ನು ಹಾರಿಸಿ ಬಿಡು
ವೆನು. ಹೀಗೆಲ್ಲಾ ಯಾಕೆ ಆಗುತ್ತಿದೆ? ಯಾಕೆಂದರೆ, ನನ್ನ
ಆಲಯವು ಇನ್ನೂ ಹಾಳುಬಿದ್ದಿದ್ದರೂ ನೀವೆಲ್ಲರೂ
ನಿಮ್ಮ ನಿಮ್ಮ ಮನೆಗಳನ್ನು ನೋಡಿಕೊಳ್ಳುವುದಕ್ಕಾಗಿ ಓಡಿ
ಹೋಗುತ್ತೀರಿ.
10 ಅದಕ್ಕಾಗಿಯೇ ಆಕಾಶವು ಮಂಜನ್ನು ಸುರಿಸುವು
ದಿಲ್ಲ. ಭೂಮಿಯು ಪೈರನ್ನು ಬೆಳೆಸುವದಿಲ್ಲ.’’
11 ಯೆಹೋವನು ಹೇಳುವದೇನೆಂದರೆ, ‘‘ನಾನು
ಭೂಮಿಗೂ ಪರ್ವತಗಳಿಗೂ ಒಣಗಿಹೋಗಲು ಆಜ್ಞಾಪಿ
ಸಿದ್ದೇನೆ. ಬೆಳೆ, ಹೊಸ ದ್ರಾಕ್ಷಾರಸ, ಆಲೀವ್ ಎಣ್ಣೆ ಮತ್ತು
ಭೂಮಿಯು ಫಲಿಸುವ ಯಾವ ವಸ್ತುವಾಗಲೀ ನಾಶ
ವಾಗುವದು. ಮತ್ತು ಎಲ್ಲಾ ಮನುಷ್ಯರೂ ಬಲಹೀನ
ರಾಗುವರು; ಪ್ರಾಣಿಗಳೂ ಬಲಹೀನವಾಗುವವು.’’

### ಹೊಸ ಆಲಯದ ಕಾರ್ಯಾಚರಣೆ

12 ಶೆಯಲ್ತೀಯೇಲನ ಮಗನಾದ ಜೆರುಬ್ಬಾಬೆಲನಿಗೂ
ಯೆಹೋಚಾದಾಕನ ಮಗನೂ ಪ್ರಧಾನಯಾಜಕನೂ
ಆದ ಯೆಹೋಶುವನಿಗೂ ಸಂದೇಶವನ್ನು ಕೊಡಲು
ದೇವರಾದ ಯೆಹೋವನು ಹಗ್ಗಾಯನನ್ನು ಕಳುಹಿಸಿ
ದನು. ಆದ್ದರಿಂದ ಇವರು ಮತ್ತು ಎಲ್ಲಾ ಜನರು ತಮ್ಮ
ದೇವರಾದ ಯೆಹೋವನ ಸ್ವರವನ್ನು ಮತ್ತು ಪ್ರವಾದಿ
ಯಾದ ಹಗ್ಗಾಯನ ಮಾತುಗಳನ್ನು ಕೇಳಿದರು ಮತ್ತು
ತಮ್ಮ ದೇವರಾದ ಯೆಹೋವನಲ್ಲಿ ಭಯಭಕ್ತಿಯುಳ್ಳವ
ರಾದರು.

13ದೇವರು ತನ್ನ ಈ ಸಂದೇಶವನ್ನು ಜನರಿಗೆ ತಲುಪಿಸು
ವಂತೆ ಹಗ್ಗಾಯನನ್ನು ಉಪಯೋಗಿಸಿದನು. ಯೆಹೋ
ವನು ಇಂತೆನ್ನುತ್ತಾನೆ, ‘‘ನಾನು ನಿಮ್ಮೊಂದಿಗಿದ್ದೇನೆ.’’
14ಬಳಿಕ ದೇವರಾದ ಯೆಹೋವನು ಆಲಯವನ್ನು
ಕಟ್ಟುವಂತೆ ಜನರನ್ನು ಪ್ರೇರೇಪಿಸಿದನು. ಶೆಯಲ್ತೀಯೇ
ಲನ ಮಗನಾದ ಜೆರುಬ್ಬಾಬೆಲನು ಯೆಹೂದ ಪ್ರಾಂತ್ಯದ
ರಾಜ್ಯಪಾಲನಾಗಿದ್ದನು. ಯೆಹೋವನು ಅವನನ್ನು
ಪ್ರೇರೇಪಿಸಿದನು. ಯೆಹೋಚಾದಾಕನ ಮಗನಾದ
ಯೆಹೋಶುವನು ಪ್ರಧಾನ ಯಾಜಕನಾಗಿದ್ದನು.
ಯೆಹೋವನು ಅವನನ್ನು ಪ್ರೇರೇಪಿಸಿದನು ಅಲ್ಲದೆ
ಯೆಹೋವನು ಆಲಯವನ್ನು ಕಟ್ಟಲು ಎಲ್ಲಾ ಜನರನ್ನು
ಪ್ರೋತ್ಸಾಹಿಸಿದನು. ಆದುದರಿಂದ ಅವರೆಲ್ಲರೂ ತಮ್ಮ
ದೇವರಾದ ಯೆಹೋವನಿಗೆ ಆಲಯವನ್ನು ಕಟ್ಟಲು
ಪ್ರಾರಂಭಿಸಿದರು. 15ಪರ್ಶಿಯಾದ ರಾಜನಾದ ದಾರ್ಯಾ
ವೇಷನ ಆಳ್ವಿಕೆಯ ಎರಡನೇ ವರ್ಷದ ಆರನೇ ತಿಂಗಳಿನ
ಇಪ್ಪತ್ನಾಲ್ಕನೆಯ ದಿವಸದಲ್ಲಿ ಕಟ್ಟುವ ಕಾರ್ಯವನ್ನು
ಪ್ರಾರಂಭಿಸಿದರು.

### ಯೆಹೋವನು ಜನರನ್ನು ಉತ್ತೇಜಿಸಿದನು

2 ಏಳನೇ ತಿಂಗಳಿನ ಇಪ್ಪತ್ತೊಂದನೆಯ ದಿವಸದಲ್ಲಿ
ಹಗ್ಗಾಯನಿಗೆ ಯೆಹೋವನಿಂದ ಈ ಸಂದೇಶವು
ದೊರಕಿತು: 2‘‘ಶೆಯಲ್ತೀಯೇಲನ ಮಗನೂ ರಾಜ್ಯ
ಪಾಲನೂ ಆಗಿರುವ ಜೆರುಬ್ಬಾಬೆಲನಿಗೂ ಮಹಾಯಾಜ
ಕನೂ ಯೆಹೋಚಾದಾಕನ ಮಗನೂ ಆಗಿರುವ
ಯೆಹೋಶುವನಿಗೂ ಮತ್ತು ಎಲ್ಲಾ ಜನರಿಗೂ ಈ
ವಿಷಯಗಳನ್ನು ತಿಳಿಸು. 3‘‘ನಿಮ್ಮಲ್ಲಿ ಎಷ್ಟು ಮಂದಿ ಹೊಸ
ಆಲಯವನ್ನು ನೋಡುವಾಗ ಕೆಡವಲ್ಪಟ್ಟ ಮೊದಲನೇ
ಆಲಯದ ಸೌಂದರ್ಯವನ್ನೂ ಗಾಂಭೀರ್ಯವನ್ನೂ
ನೆನಪು ಮಾಡುತ್ತೀರಿ? ನಿಮ್ಮ ಆಲೋಚನೆಯೇನು?
ಮೊದಲಿನ ಆಲಯದೊಡನೆ ಈ ಆಲಯವನ್ನು ಹೋಲಿಸಿ
ದಾಗ ಇದು ಏನೂ ಅಲ್ಲವೆಂದು ತೋರುತ್ತದೋ?
4ಆದರೆ ಜೆರುಬ್ಬಾಬೆಲನೇ, ಯೆಹೋವನು ಇಂತೆನ್ನು
ತ್ತಾನೆ, ನಿರುತ್ಸಾಹಗೊಳ್ಳಬೇಡ! ಮಹಾಯಾಜಕನಾದ
ಯೆಹೋಶುವನೇ, ನಿರುತ್ಸಾಹಗೊಳ್ಳಬೇಡ! ಈ ದೇಶದ
ಎಲ್ಲಾ ಜನರೇ, ನಿರುತ್ಸಾಹಗೊಳ್ಳಬೇಡಿ, ಕೆಲಸವನ್ನು
ಮುಂದುವರಿಸಿರಿ, ಯಾಕೆಂದರೆ ನಾನೇ ನಿಮ್ಮೊಂದಿಗಿ
ದ್ದೇನೆ’’’ ಎಂದು ಯೆಹೋವನು ಹೇಳುತ್ತಾನೆ. ಇದು
ಸರ್ವಶಕ್ತನಾದ ಯೆಹೋವನ ನುಡಿ.
5ಯೆಹೋವನು ಹೇಳುವದೇನೆಂದರೆ, ‘‘ನೀವು
ಈಜಿಪ್ಟ್ ದೇಶವನ್ನು ಬಿಟ್ಟಾಗ ನಾನು ನಿಮ್ಮೊಂದಿಗೆ
ಒಡಂಬಡಿಕೆಯನ್ನು ಮಾಡಿಕೊಂಡೆನು. ನಾನು ಆ
ವಾಗ್ದಾನವನ್ನು ನೆರವೇರಿಸಿದ್ದೇನೆ! ನನ್ನ ಆತ್ಮವು ನಿಮ್ಮೊಂದಿ
ಗಿದೆ. ಆದುದರಿಂದ ಭಯಪಡಬೇಡಿ! 6ಸರ್ವಶಕ್ತನಾದ
ಯೆಹೋವನು ಇಂತೆನ್ನುತ್ತಾನೆ: ಹೇಳುತ್ತಿದ್ದಾನೆ. ಇನ್ನು
ಸ್ವಲ್ಪ ಸಮಯದಲ್ಲಿ ನಾನು ಭೂಪರಲೋಕಗಳನ್ನು
ಅದುರಿಸುವೆನು. ಸಮುದ್ರವನ್ನೂ ಒಣನೆಲವನ್ನೂ ಕಂಪಿ
ಸುವೆನು. 7ನಾನು ಜನಾಂಗಗಳನ್ನು ನಡುಗಿಸುವೆನು. ಆಗ
ಅವರು ಎಲ್ಲಾ ಜನಾಂಗಗಳ ಐಶ್ವರ್ಯದೊಡನೆ ನಿಮ್ಮ
ಲ್ಲಿಗೆ ಬರುವರು. ಆಗ ನನ್ನ ಈ ಆಲಯವನ್ನು ಮಹಿಮೆ
ಯಿಂದ ತುಂಬಿಸುವೆನು. ಸರ್ವಶಕ್ತನಾದ ದೇವರು
ಇದನ್ನು ಹೇಳುತ್ತಿದ್ದಾನೆ! 8ಅವರ ಬೆಳ್ಳಿಯೆಲ್ಲವೂ ನನ್ನದೇ,
ಅವರ ಬಂಗಾರವೂ ನನ್ನದೇ. ಇದು ಸರ್ವಶಕ್ತನಾದ
ಯೆಹೋವನ ನುಡಿ. 9ಈ ಅಂತಿಮ ದೇವಾಲಯವು
ಮೊದಲನೆ ಆಲಯಕ್ಕಿಂತಲೂ ಸುಂದರವಾಗಿರುವುದು!
ನಾನು ಈ ಸ್ಥಳಕ್ಕೆ ಸಮಾಧಾನವನ್ನು ತರುವೆನು! ಜ್ಞಾಪಕ
ದಲ್ಲಿಡಿ, ಇವುಗಳನ್ನು ಸರ್ವಶಕ್ತನಾದ ಯೆಹೋವನು
ಹೇಳುತ್ತಿದ್ದಾನೆ!’’

### ಕೆಲಸವು ಪ್ರಾರಂಭವಾಯಿತು;<br>ಆಶೀರ್ವಾದವು ಬರುವುದು

10ಪರ್ಶಿಯ ದೇಶದ ರಾಜನಾದ ದಾರ್ಯಾವೇಷನ
ಆಳ್ವಿಕೆಯ ಎರಡನೇ ವರ್ಷದ ಒಂಭತ್ತನೆಯ ತಿಂಗಳಿನ
ಇಪ್ಪತ್ನಾಲ್ಕನೆಯ ದಿವಸದಂದು ಯೆಹೋವನ ಸಂದೇಶವು
ಪ್ರವಾದಿಯಾದ ಹಗ್ಗಾಯನಿಗೆ ಬಂದಿತು. 11ಈ ವಿಷ
ಯದ ಬಗ್ಗೆ ಧರ್ಮಶಾಸ್ತ್ರವು ಏನು ಹೇಳುತ್ತದೆ ಎಂಬು
ದನ್ನು ತಿಳಿದುಕೊಳ್ಳಲು ಯಾಜಕರನ್ನು ವಿಚಾರಿಸು ಎಂಬು
ದಾಗಿ ಸರ್ವಶಕ್ತನಾದ ಯೆಹೋವನು ನಿನಗೆ ಆಜ್ಞಾಪಿಸು
ತ್ತಾನೆ._12‘‘ಒಬ್ಬನು ತನ್ನ ಬಟ್ಟೆಯ ಸೆರಗಿನಲ್ಲಿ ಮಾಂಸ
ವನ್ನು ಒಯ್ಯುತ್ತಿದ್ದಾನೆಂದು ನೆನಸಿರಿ. ಆ ಮಾಂಸವು
ಯಜ್ಞದ ಒಂದು ಭಾಗವಾಗಿದೆ. ಆದುದರಿಂದ ಅದು
ಪವಿತ್ರವಾದದ್ದು. ಆ ಬಟ್ಟೆಯು ರೊಟ್ಟಿಯನ್ನಾಗಲೀ,
ಅಡಿಗೆ ಮಾಡಿದ ಆಹಾರವಾಗಲೀ, ದ್ರಾಕ್ಷಾರಸವ
ನ್ನಾಗಲೀ, ಎಣ್ಣೆಯನ್ನಾಗಲೀ, ಮುಟ್ಟಿದರೆ ಮುಟ್ಟಿದ ವಸ್ತು
ಪವಿತ್ರ ವಸ್ತುವಾಗಬಹುದೇ?’’ ಯಾಜಕರು ಉತ್ತರವಾಗಿ
‘ಇಲ್ಲ’ ಎಂದರು.
13ಆಗ ಹಗ್ಗಾಯನು, ‘‘ಒಬ್ಬ ಮನುಷ್ಯನು ಸತ್ತ ಹೆಣ
ವನ್ನು ಮುಟ್ಟಿದರೆ, ಅವನು ಅಪವಿತ್ರನಾಗುವನು. ಆ ಸ್ಥಿತಿ
ಯಲ್ಲಿ ಅವನು ಮುಟ್ಟಿದ ಯಾವ ವಸ್ತುವೇ ಆಗಲಿ
ಅಪವಿತ್ರ ವಾಗುವದು.’’

ಆಗ ಯಾಜಕರು, ‘‘ಹೌದು, ಆ ವಸ್ತುಗಳೂ ಅಪವಿತ್ರ
ವಾಗುವವು’’ ಎಂದು ಉದ್ಗರಿಸಿದರು.
14ಆಗ ಹಗ್ಗಾಯನು, ‘‘ನಿಮ್ಮ ದೇವರಾದ ಯೆಹೋ
ವನು ಇಂತೆನ್ನುತ್ತಾನೆ: ‘ಈ ಜನಾಂಗದ ಜನರ ವಿಷಯ
ದಲ್ಲಿಯೂ ಅದು ಸತ್ಯವಾಗಿದೆ. ಅವರು ನನ್ನ ಮುಂದೆ

ಪವಿತ್ರರಲ್ಲ. ಆದುದರಿಂದ ಅವರು ಯಾವ ವಸ್ತುವ
ನ್ನಾದರೂ ಮುಟ್ಟಿದರೆ ಅದು ಅಶುದ್ಧವಾಗುವುದು ಮತ್ತು
ಅವರು ಯಜ್ಞವೇದಿಕೆಯ ಮೇಲೆ ಅರ್ಪಿಸುವುದೆಲ್ಲಾ
ಅಶುದ್ಧವಾಗಿರುವುದು. [15]ಈ ಹೊತ್ತಿಗಿಂತ ಮುಂಚೆ ನಡೆದ
ಸಂಗತಿಗಳನ್ನು ಜ್ಞಾಪಕಕ್ಕೆ ತಂದುಕೊಳ್ಳಿರಿ. ನೀವು
ದೇವಾಲಯವನ್ನು ಕಟ್ಟಲು ಆರಂಭಿಸಿದ ಹಿಂದಿನ ದಿವಸ
ಗಳನ್ನು ನೆನಪಿಗೆ ತಂದುಕೊಳ್ಳಿರಿ. [16]ಜನರಿಗೆ ಇಪ್ಪತ್ತು
ಕಿಲೋ ಧಾನ್ಯ ಬೇಕಿದ್ದರೆ ರಾಶಿಯಲ್ಲಿ ಹತ್ತು ಕಿಲೋ
ಮಾತ್ರ ಇರುತ್ತಿತ್ತು. ಜನರು ದ್ರಾಕ್ಷಾರಸದ ಪೀಪಾಯಿ
ಯಿಂದ ಐವತ್ತು ಲೀಟರ್ ದ್ರಾಕ್ಷಾರಸ ತೆಗೆಯಲು
ಹೋದರೆ ಅಲ್ಲಿ ಇಪ್ಪತ್ತು ಲೀಟರ್ ಮಾತ್ರ ಇರುತ್ತಿತ್ತು.
[17]ಯಾಕೆ ಹೀಗಾಯಿತು? ಯಾಕೆಂದರೆ ನಾನು ನಿಮ್ಮನ್ನು
ಶಿಕ್ಷಿಸಿದೆನು. ನೀವು ನೆಟ್ಟ ಮರಗಳನ್ನು ನಾಶಮಾಡಲು
ನಾನು ರೋಗವನ್ನು ಕಳುಹಿಸಿದೆನು. ನಿಮ್ಮ ಕೈಕೆಲಸವನ್ನು
ಹಾಳು ಮಾಡಲು ನಾನು ಆಲಿಕಲ್ಲಿನ ಮಳೆಯನ್ನು ಕಳುಹಿ
ಸಿದೆನು. ನಾನು ಇಷ್ಟೆಲ್ಲಾ ಮಾಡಿದರೂ ನೀವು ಯಾರೂ
ನನ್ನ ಬಳಿಗೆ ಬರಲಿಲ್ಲ.’ ಇದು ಯೆಹೋವನ ನುಡಿ.’’

[18]ಯೆಹೋವನು ಹೀಗನ್ನುತ್ತಾನೆ, ‘‘ಈ ಹೊತ್ತು
ಒಂಭತ್ತನೇ ತಿಂಗಳಿನ ಇಪ್ಪತ್ನಾಲ್ಕನೆಯ ದಿವಸವಾಗಿದೆ.
ಆಲಯದ ಶಂಕುಸ್ಥಾಪನೆ ಮಾಡಿ ಮುಗಿಸಿರುತ್ತೀರಿ. ಇನ್ನು
ಮುಂದಕ್ಕೆ ಏನು ನಡಿಯುತ್ತದೆಂದು ಗಮನಿಸಿರಿ.
[19]ಉಗ್ರಾಣದಲ್ಲಿ ಗೋಧಿಯ ಕಾಳು ಏನಾದರೂ ಉಳಿದಿ
ದೆಯೋ? ಇಲ್ಲ! ದ್ರಾಕ್ಷಿಬಳ್ಳಿಗಳನ್ನು, ಅಂಜೂರದ ಮರ
ಗಳನ್ನು, ದಾಳಿಂಬದ ಮರಗಳನ್ನು, ಆಲೀವ್ ಮರಗಳನ್ನು
ನೋಡಿರಿ. ಅವು ಹಣ್ಣುಗಳನ್ನು ಬಿಡುತ್ತವೋ? ಇಲ್ಲ.
ಆದರೆ ಈ ದಿನದಿಂದ ನಾನು ನಿಮ್ಮನ್ನು
ಆಶೀರ್ವದಿಸುತ್ತೇನೆ!’’

[20]ಒಂಭತ್ತನೇ ತಿಂಗಳ ಇಪ್ಪತ್ನಾಲ್ಕನೆಯ ದಿವಸದಲ್ಲಿ
ಇನ್ನೊಂದು ಸಂದೇಶವು ಹಗ್ಗಾಯನಿಗೆ ಯೆಹೋವನಿಂದ
ಬಂದಿತು. ಇದೇ ಆ ಸಂದೇಶ. [21]‘‘ಯೆಹೂದ ಪ್ರಾಂತ್ಯದ
ರಾಜ್ಯಪಾಲನಾದ ಜೆರುಬ್ಬಾಬೆಲನ ಬಳಿಗೆ ಹೋಗು.
ನಾನು ಭೂಮ್ಯಾಕಾಶಗಳನ್ನು ಅಲ್ಲಾಡಿಸುವೆನು’’ ಎಂದು
ಅವನಿಗೆ ಹೇಳು. [22]ನಾನು ಅನೇಕ ಅರಸರನ್ನೂ ದೇಶ
ಗಳನ್ನೂ ಕೆಡವಿಹಾಕುವೆನು; ಆ ಅನ್ಯ ಜನರ ಬಲಿಷ್ಠ
ಸಾಮ್ರಾಜ್ಯಗಳನ್ನು ನಾಶಮಾಡುವೆನು. ಅವರ ರಥ
ಗಳನ್ನೂ ರಾಹುತರನ್ನೂ ನಾಶಮಾಡುವೆನು. ಅವರ
ಯುದ್ಧದ ಕುದುರೆಗಳನ್ನೂ ಸವಾರರನ್ನೂ ಸೋಲಿಸು
ವೆನು. ಆ ಸೈನ್ಯಗಳವರು ಈಗ ಸ್ನೇಹಿತರಾಗಿದ್ದರೂ ಒಬ್ಬರಿ
ಗೊಬ್ಬರು ವೈರಿಗಳಾಗಿ ಒಬ್ಬರನ್ನೊಬ್ಬರು ಖಡ್ಗಗಳಿಂದ
ಕೊಲ್ಲುವರು.

[23]ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ:
‘‘ಶೆಯಲ್ತೀಯೇಲನ ಮಗನಾದ ಜೆರುಬ್ಬಾಬೆಲನೇ,
ನೀನು ನನ್ನ ಸೇವಕ. ನಿನ್ನನ್ನು ನಾನು ಆರಿಸಿಕೊಂಡಿದ್ದೇನೆ.
ಆ ಸಮಯದಲ್ಲಿ ನಾನು ನಿನ್ನನ್ನು ಒಂದು ಮುದ್ರೆ
ಯುಂಗುರವನ್ನಾಗಿ ಮಾಡುವೆನು. ನಾನು ಇವೆಲ್ಲವನ್ನು
ಮಾಡಿದೆನೆಂಬುದಕ್ಕೆ ನೀನು ಸಾಕ್ಷಿಯಾಗಿರುವಿ.’’

ಸರ್ವಶಕ್ತನಾದ ಯೆಹೋವನು ಇವೆಲ್ಲವನ್ನು
ನುಡಿದಿದ್ದಾನೆ.

# ಜೆಕರ್ಯ

## ತನ್ನ ಜನರು ಹಿಂದಿರುಗಿ ಬರಬೇಕೆಂದು ಯೆಹೋವನು ಆಶಿಸುತ್ತಾನೆ

1 ಪರ್ಶಿಯಾದಲ್ಲಿ ರಾಜನಾದ ದಾರ್ಯಾವೆಷನ ಆಳ್ವಿಕೆಯ ಎರಡನೆಯ ವರುಷದ ಎಂಟನೆಯ ತಿಂಗಳಲ್ಲಿ ಬೆರೆಕ್ಯನ ಮಗನಾದ ಜೆಕರ್ಯನಿಗೆ ಯೆಹೋವನಿಂದ ಸಂದೇಶವು ದೊರಕಿತು. ಬೆರೆಕ್ಯನು ಪ್ರವಾದಿಯಾದ ಇದ್ದೋವಿನ ಮಗನು. ಇದು ಆತನ ಸಂದೇಶ:

2 ನಿಮ್ಮ ಪೂರ್ವಿಕರ ಮೇಲೆ ಯೆಹೋವನು ಬಹಳವಾಗಿ ಕೋಪಗೊಂಡಿದ್ದಾನೆ. 3 ಆದುದರಿಂದ ನಿನ್ನ ಜನರಿಗೆ ನೀನು ಈ ವಿಷಯಗಳನ್ನು ತಿಳಿಸಬೇಕು. ಯೆಹೋವನು ಹೇಳುವದೇನೆಂದರೆ, ''ನನ್ನ ಬಳಿಗೆ ಹಿಂದಿರುಗಿರಿ. ಆಗ ನಾನು ನಿಮ್ಮ ಬಳಿಗೆ ಹಿಂದಿರುಗುವೆನು'' ಇದು ಸರ್ವಶಕ್ತನಾದ ಯೆಹೋವನ ಮಾತುಗಳು.

4 ಯೆಹೋವನು ಇಂತೆನ್ನುತ್ತಾನೆ: ''ನಿಮ್ಮ ಪೂರ್ವಿಕರಂತೆ ಆಗಬೇಡಿರಿ. ಹಿಂದಿನ ಕಾಲದಲ್ಲಿ ಪ್ರವಾದಿಗಳು ಅವರ ಸಂಗಡ ಮಾತನಾಡಿದರು. ಅವರು, 'ಸರ್ವಶಕ್ತನಾದ ಯೆಹೋವನು ನಿಮ್ಮ ಕೆಟ್ಟಜೀವಿತವನ್ನು ಬದಲಾಯಿಸಲು ಇಷ್ಟಪಡುತ್ತಾನೆ. ದುಷ್ಕೃತ್ಯಗಳನ್ನು ಮಾಡುವದನ್ನು ನಿಲ್ಲಿಸಿರಿ.' ಆದರೆ ನಿಮ್ಮ ಪೂರ್ವಿಕರು ನನ್ನ ಮಾತುಗಳನ್ನು ಕೇಳಲಿಲ್ಲ.'' ಇದು ಯೆಹೋವನ ನುಡಿ.

5 ಯೆಹೋವನು ಇಂತೆನ್ನುತ್ತಾನೆ: ''ನಿಮ್ಮ ಪೂರ್ವಿಕರು ದಾಟಿಹೋದರು. ಆ ಪ್ರವಾದಿಗಳು ನಿತ್ಯಕಾಲಕ್ಕೂ ಜೀವಿಸಲಿಲ್ಲ. 6 ಪ್ರವಾದಿಗಳು ನನ್ನ ಸೇವಕರು. ನಿಮ್ಮ ಪೂರ್ವಿಕರು ನ್ಯಾಯ ಪ್ರಮಾಣಗಳನ್ನು ಬೋಧಿಸಲು ನಾನು ಅವರನ್ನು ಉಪಯೋಗಿಸಿದೆನು. ನಿಮ್ಮ ಪೂರ್ವಿಕರು ಕಟ್ಟಕಡೆಗೆ ಪಾಠವನ್ನು ಕಲಿತರು. ಅವರು, 'ಸರ್ವಶಕ್ತನಾದ ಯೆಹೋವನು ತಾನು ಹೇಳಿದ್ದನ್ನು ನೆರವೇರಿಸಿದನು. ನಮ್ಮ ದುಷ್ಕೃತ್ಯಗಳಿಗಾಗಿ ನಮ್ಮನ್ನು ಶಿಕ್ಷಿಸಿದನು'' ಎಂದು ಹೇಳಿದರು ಮತ್ತು ದೇವರ ಕಡೆಗೆ ತಿರುಗಿದರು.

## ನಾಲ್ಕು ಕುದುರೆಗಳು

7 ಪರ್ಶಿಯದ ರಾಜನಾದ ದಾರ್ಯಾವೆಷನ ಆಳ್ವಿಕೆಯ ಎರಡನೆಯ ವರ್ಷದ ಹನ್ನೊಂದನೇ ತಿಂಗಳಿನ (ಶೆಬಾಟ್) ಇಪ್ಪತ್ತನಾಲ್ಕನೆಯ ದಿವಸ ಜೆಕರ್ಯನು ಯೆಹೋವನಿಂದ ಇನ್ನೊಂದು ಸಂದೇಶವನ್ನು ಪಡೆದನು. ಈತನು ಪ್ರವಾದಿಯಾದ ಇದ್ದೋವಿನ ಮಗನಾದ ಬೆರೆಕ್ಯನ ಮಗನು. ಆ ಸಂದೇಶವು ಹೀಗಿತ್ತು.

8 ರಾತ್ರಿವೇಳೆಯಲ್ಲಿ ಒಬ್ಬ ಮನುಷ್ಯನು ಕೆಂಪು ಬಣ್ಣದ ಕುದುರೆಯ ಮೇಲೆ ಸವಾರಿ ಮಾಡುವದನ್ನು ಕಂಡೆನು. ಅವನು ಕಣಿವೆಯ ಸುಗಂಧ ಮರಗಳ ಬಳಿ ನಿಂತಿದ್ದನು. ಅವನ ಹಿಂದೆ ಕೆಂಪು, ಕಂದು, ಮತ್ತು ಬಿಳಿ ಕುದುರೆಗಳು ನಿಂತಿದ್ದವು. 9 ಆಗ ನಾನು, ''ಸ್ವಾಮೀ, ಈ ಕುದುರೆಗಳು ಯಾಕೆ?'' ಎಂದು ವಿಚಾರಿಸಿದೆನು.

ಆಗ ನನ್ನೊಡನೆ ಮಾತಾಡುತ್ತಿದ್ದ ದೇವದೂತನು ಉತ್ತರಿಸುತ್ತಾ, 'ಈ ಕುದುರೆಗಳು ಯಾತಕ್ಕಾಗಿ ಎಂದು ನಾನು ನಿನಗೆ ತೋರಿಸುತ್ತೇನೆ'' ಅಂದನು.

10 ಆಗ ಸುಗಂಧ ಮರಗಳ ಬಳಿ ನಿಂತಿದ್ದ ಮನುಷ್ಯನು, ''ಈ ಕುದುರೆಗಳು ಭೂಮಿಯ ಮೇಲೆ ಅತ್ತಿತ್ತ ತಿರುಗಾಡುವಂತೆ ಯೆಹೋವನು ಕಳುಹಿಸಿದನು'' ಎಂದನು.

11 ಆಗ ಆ ಯೆಹೋವನ ದೂತನೊಂದಿಗೆ ಕುದುರೆಗಳು ಮಾತನಾಡುತ್ತಾ, ''ನಾವು ಭೂಮಿಯ ಮೇಲೆ ಅತ್ತಿತ್ತ ಸಂಚರಿಸಿದೆವು. ಎಲ್ಲೆಲ್ಲಿಯೂ ಶಾಂತಿ ಸಮಾಧಾನವಿದೆ'' ಎಂದವು.

12 ಆಗ ಯೆಹೋವನ ದೂತನು, ''ಯೆಹೋವನೇ, ಜೆರುಸಲೇಮನ್ನೂ ಯೆಹೂದದ ಇತರ ನಗರಗಳನ್ನೂ ಸಂತೈಸಲು ಇನ್ನೆಷ್ಟು ಕಾಲ ಬೇಕು? ಈ ಪಟ್ಟಣಗಳ ಮೇಲೆ ಈಗಾಗಲೇ ಎಪ್ಪತ್ತು ವರ್ಷಗಳ ಕಾಲ ನಿನ್ನ ಕೋಪವನ್ನು ಪ್ರದರ್ಶಿಸಿರುವೆ'' ಎಂದು ಹೇಳಿದನು.

13 ಆಗ ನನ್ನೊಡನೆ ಮಾತಾಡುತ್ತಿದ್ದ ದೇವದೂತನಿಗೆ ಯೆಹೋವನು ಉತ್ತರಿಸಿ ಅವನನ್ನು ಒಳ್ಳೆಯ ಆದರಣೆಯ ಮಾತುಗಳಿಂದ ಸಂತೈಸಿದನು. 14 ಆಗ ಆ ದೂತನು ಜನರಿಗೆ ತಿಳಿಸಲು ಈ ವಿಷಯವನ್ನು ನನಗೆ ಹೇಳಿದನು:

ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ,
''ಜೆರುಸಲೇಮಿನ ಮೇಲೆಯೂ ಚೀಯೋನಿನ
ಮೇಲೆಯೂ ನನಗೆ ಆಳವಾದ ಪ್ರೀತಿಯಿದೆ.

15 ತಾವು ಸುರಕ್ಷಿತರಾಗಿದ್ದೇವೆ ಎಂದು ನೆನಸುವ ಜನಾಂಗಗಳ ಮೇಲೆ ನಾನು ಕೋಪಗೊಳ್ಳುವೆನು. ನಾನು ಸ್ವಲ್ಪ ಕೋಪಗೊಂಡಿದ್ದರಿಂದ ನನ್ನ ಜನರನ್ನು ಶಿಕ್ಷಿಸಲು ಆ ಜನಾಂಗಗಳನ್ನು ಉಪಯೋಗಿಸಿಕೊಂಡೆನು. ಆದರೆ ಆ ಜನಾಂಗಗಳು ಅವರಿಗೆ ಅತಿಯಾಗಿ ಅವರನ್ನು ಹಾನಿ ಮಾಡಿದರು.''

16 ಆದುದರಿಂದ ಯೆಹೋವನು ಇಂತೆನ್ನುತ್ತಾನೆ: ''ನಾನು ಜೆರುಸಲೇಮಿಗೆ ಹಿಂತಿರುಗಿ ಬರುವೆನು. ಬಂದು ಆಕೆಯನ್ನು ಸಂತೈಸುವೆನು.'' ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ, ''ಜೆರುಸಲೇಮ್ ತಿರುಗಿ ಕಟ್ಟಲ್ಪಡುವದು ಮತ್ತು ನನ್ನ ಆಲಯವು ಅಲ್ಲಿ ಕಟ್ಟಲ್ಪಡುವದು.''

17 ಆಗ ದೂತನು: ''ಅಲ್ಲದೆ ಈ ವಿಷಯವನ್ನೂ ಜನರಿಗೆ ತಿಳಿಸು, ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ: 'ನನ್ನ ಪಟ್ಟಣಗಳು ತಿರುಗಿ ಐಶ್ವರ್ಯದಿಂದ ತುಂಬುವವು. ಚೀಯೋನನ್ನು ನಾನು ಸಂತೈಸುವೆನು. ನಾನು ಜೆರುಸಲೇಮನ್ನು ನನ್ನ ವಿಶೇಷ ನಗರವನ್ನಾಗಿ ಆರಿಸಿಕೊಳ್ಳುವೆನು''' ಎಂದನು.

### ನಾಲ್ಕುಕೊಂಬುಗಳೂ ನಾಲ್ಕು ಕೆಲಸಗಾರರೂ

18 ಆಗ ನಾನು ಮೇಲೆ ನೋಡಿದಾಗ ನಾಲ್ಕು ಕೊಂಬು
ಗಳನ್ನು ಕಂಡೆನು.
19 ''ಈ ಕೊಂಬುಗಳೇನು? ಎಂದು ನಾನು ದೇವದೂತ
ನೊಂದಿಗೆ ವಿಚಾರಿಸಿದೆನು.
ಅದಕ್ಕವನು, ''ಇವು ಬಲಿಷ್ಠವಾದ ಕೊಂಬುಗಳು
(ಬಲಿಷ್ಠವಾದ ಜನಾಂಗಗಳು); ಇಸ್ರೇಲ್, ಯೆಹೂದ
ಮತ್ತು ಜೆರುಸಲೇಮಿನ ಜನರನ್ನು ಪರದೇಶಗಳಿಗೆ ಚದರಿ
ಹೋಗುವಂತೆ ಮಾಡಿವೆ'' ಅಂದನು.
20 ಯೆಹೋವನು ನನಗೆ ನಾಲ್ಕು ಮಂದಿ ಕೆಲಸಗಾರ
ರನ್ನು ತೋರಿಸಿದನು. 21 ''ಯಾವ ಕೆಲಸಕ್ಕಾಗಿ ಈ ಕೆಲಸ
ಗಾರರು ಬರುತ್ತಿದ್ದಾರೆ?'' ಎಂದು ನಾನು ವಿಚಾರಿಸಿದೆನು.
ಅದಕ್ಕಾತನು, ''ಯೆಹೂದದ ಜನರನ್ನು ವಿದೇಶಗಳಲ್ಲಿ
ಚದರಿ ಹೋಗುವಂತೆ ಮಾಡಿದ ಜನಾಂಗಗಳನ್ನು ಈ
ಕೊಂಬುಗಳು ಸೂಚಿಸುತ್ತವೆ. ಈ ಕೊಂಬುಗಳು ಯೆಹೂ
ದದ ಜನರನ್ನು ಎತ್ತಿ ಪರದೇಶಗಳಿಗೆ ಬಿಸಾಡಿದವು. ಆ
ಕೊಂಬುಗಳು ಯಾರಿಗೂ ದಯೆ ತೋರಿಸಲಿಲ್ಲ. ಆದರೆ
ಈ ನಾಲ್ಕು ಮಂದಿ ಕೆಲಸಗಾರರು ಆ ಕೊಂಬುಗಳಿಗೆ
ಭಯಪಡಿಸಿ ಅವುಗಳನ್ನು ಎತ್ತಿ ಬಿಸಾಡಿ ಬಿಡಲು ಬಂದಿ
ದ್ದಾರೆ'' ಎಂದು ಹೇಳಿದನು.

### ಜೆರುಸಲೇಮನ್ನು ಅಳತೆ ಮಾಡಿದ್ದು

2 ಆಗ ನಾನು ಮೇಲಕ್ಕೆ ನೋಡಿದಾಗ ಒಬ್ಬ
ಮನುಷ್ಯನು ಕೈಯಲ್ಲಿ ಒಂದು ಹಗ್ಗ ಮತ್ತು ಅಳತೆ
ಮಾಡುವ ಸಾಮಗ್ರಿಗಳನ್ನು ಹಿಡಿದುಕೊಂಡಿದ್ದನ್ನು
ಕಂಡೆನು. 2 ''ನೀನು ಎಲ್ಲಿಗೆ ಹೋಗುತ್ತೀ?'' ಎಂದು
ನಾನು ಅವರನ್ನು ವಿಚಾರಿಸಿದೆನು.
''ನಾನು ಜೆರುಸಲೇಮ್ ಎಷ್ಟು ಉದ್ದಗಲವಿದೆ
ಯೆಂದು ಅಳತೆ ಮಾಡಲು ಹೋಗುತ್ತಿದ್ದೇನೆ'' ಎಂದನು.
3 ಆಗ ನನ್ನೊಡನೆ ಮಾತನಾಡುತ್ತಿದ್ದ ದೂತನು ನನ್ನನ್ನು
ಬಿಟ್ಟುಹೋದನು. ಅವನೊಡನೆ ಮಾತನಾಡಲು
ಇನ್ನೊಬ್ಬ ದೂತನು ಬಂದನು.
4 ಅವನು, ''ಓಡಿಹೋಗಿ ಆ ಯೌವನಸ್ಥನಿಗೆ ಜೆರುಸ
ಲೇಮು ಅಳತೆ ಮಾಡಲು ಸಾಧ್ಯವಾಗದಷ್ಟು ದೊಡ್ಡ
ದಾಗಿದೆ ಎಂದು ಹೇಳು. ಅಲ್ಲದೆ ಅವನಿಗೆ ಈ ವಿಷಯ
ವನ್ನೂ ತಿಳಿಸು:

'ಜೆರುಸಲೇಮ್ ಗೋಡೆಗಳಿಲ್ಲದ ಪಟ್ಟಣವಾಗುವದು. ಯಾಕೆಂದರೆ ಅಷ್ಟೊಂದು ಜನರೂ, ಜಾನುವಾರುಗಳೂ ಅಲ್ಲಿ ವಾಸಿಸುವವು.'

5 ಯೆಹೋವನು ಹೇಳುವದೇನೆಂದರೆ, 'ನಾನು ಆಕೆಯ ಸುತ್ತಲೂ ಆಕೆಯನ್ನೂ ಸಂರಕ್ಷಿಸುವ ಬೆಂಕಿಯ ಗೋಡೆಯಂತಿರುವೆನು. ಮತ್ತು ನಾನು ಅಲ್ಲಿಯೇ ವಾಸಿಸುವದರಿಂದ ಆ ನಗರಕ್ಕೆ ಮಹಿಮೆಯನ್ನು ತರುವೆನು.''

### ತಮ್ಮ ಮನೆಗೆ ಬರಲು ದೇವರು ತನ್ನ ಜನರನ್ನು ಕರೆಯುತ್ತಾನೆ

6 ಯೆಹೋವನು ಇಂತೆನ್ನುತ್ತಾನೆ, ''ಅವಸರಪಡುತ್ತಾ ಉತ್ತರದ ದೇಶಗಳಿಂದ ಹೊರ ಬಾ. ಹೌದು, ನಾನು ನಿನ್ನ ಜನರನ್ನು ಪ್ರತಿಯೊಂದು ದಿಕ್ಕಿಗೂ ಚದರಿಸಿರುವುದು ನಿಜ.

7 ಚೀಯೋನಿನ ಜನರಾದ ನೀವು ಬಾಬಿಲೋನಿನಲ್ಲಿ ವಾಸಿಸುತ್ತಿದ್ದೀರಿ. ಅಲ್ಲಿಂದ ತಪ್ಪಿಸಿಕೊಂಡು ಬನ್ನಿರಿ. ಆ ನಗರದಿಂದ ಓಡಿಹೋಗಿರಿ.'' ಇದು ಸರ್ವಶಕ್ತನಾದ ಯೆಹೋವನ ನುಡಿ. ನಿಮ್ಮ ವಸ್ತುಗಳನ್ನು ಕದ್ದುಕೊಂಡ ಜನಾಂಗಗಳಿಗೆ ಆತನು ನನ್ನನ್ನು ಕಳುಹಿಸಿದನು. ನಿಮಗೆ ಗೌರವವನ್ನು ತರುವುದಕ್ಕಾಗಿ ಆತನು ನನ್ನನ್ನು ಕಳುಹಿಸಿದನು.

8 ಯಾಕೆಂದರೆ, ನಿಮಗೆ ಹಾನಿ ಮಾಡಿದರೆ ಅದು ದೇವರ ಕಣ್ಣುಗುಡ್ಡೆಗೆ ಹಾನಿ ಮಾಡಿದಂತೆ.

9 ಬಾಬಿಲೋನಿನ ಜನರು ನನ್ನ ಜನರನ್ನು ತೆಗೆದುಕೊಂಡು ಹೋಗಿ ತಮ್ಮ ಗುಲಾಮರನ್ನಾಗಿ

ಮಾಡಿದರು. ಆದರೆ ನಾನು ಅವರನ್ನು ಹೊಡೆಯು
ವೆನು. ಅವರನ್ನು ನನ್ನ ಜನರ ಗುಲಾಮರನ್ನಾಗಿ
ಮಾಡುವೆನು. ಆಗ ಯೆಹೋವ ದೇವರು ನನ್ನನ್ನು
ಕಳುಹಿಸಿದನೆಂಬದು ನಿಮಗೆ ಗೊತ್ತಾಗುವದು.

10 ಯೆಹೋವನು ಇಂತೆನ್ನುತ್ತಾನೆ, ''ಚೀಯೋನೇ,
ಆನಂದಿಸು, ಯಾಕೆಂದರೆ ನಾನು ಬಂದು ನಿಮ್ಮ
ಪಟ್ಟಣದಲ್ಲಿ ವಾಸಿಸುವೆನು.
11 ಆ ಸಮಯದಲ್ಲಿ ವಿವಿಧ ಜನಾಂಗಗಳ ಜನರು
ನನ್ನನ್ನು ನೋಡಲು ಬರುವರು. ಅವರು ನನ್ನ ಜನ
ರಾಗುವರು. ಮತ್ತು ನಾನು ನಿಮ್ಮ ನಗರದಲ್ಲಿ
ವಾಸಿಸುವೆನು.'' ಆಗ ಸರ್ವಶಕ್ತನಾದ ದೇವರು
ನನ್ನನ್ನು ಕಳುಹಿಸಿದ್ದಾನೆಂದು ನಿಮಗೆ
ಗೊತ್ತಾಗುವುದು.
12 ಯೆಹೋವನು ತಿರುಗಿ ಜೆರುಸಲೇಮನ್ನು ತನ್ನ
ವಿಶೇಷ ನಗರವನ್ನಾಗಿ ಆರಿಸಿಕೊಳ್ಳುವನು.
ಯೆಹೂದವು ಆ ಪವಿತ್ರ ದೇಶದಲ್ಲಿರುವ ಆತನ
ಪಾಲು.
13 ಎಲ್ಲರೂ ಮೌನವಾಗಿರಿ. ಯೆಹೋವನು ತನ್ನ
ಪರಿಶುದ್ಧ ನಿವಾಸದಿಂದ ಹೊರ ಬರುತ್ತಿದ್ದಾನೆ.

## ಪ್ರಧಾನ ಯಾಜಕನು

3 ದೇವದೂತನು ನನಗೆ ಪ್ರಧಾನ ಯಾಜಕನಾದ
ಯೆಹೋಶುವನನ್ನು ತೋರಿಸಿದನು. ಅವನು
ಯೆಹೋವನ ದೂತನ ಮುಂದೆ ನಿಂತಿದ್ದನು. ಸೈತಾನನು
ಯೆಹೋಶುವನ ಬಲಗಡೆಯಲ್ಲಿ ನಿಂತಿದ್ದನು.
ಯೆಹೋಶುವನು ಕೆಟ್ಟಕೃತ್ಯಗಳನ್ನು ಮಾಡಿದ್ದಾನೆಂದು
ದೂರು ಹೇಳುವದಕ್ಕಾಗಿ ಸೈತಾನನು ಅಲ್ಲಿ ನಿಂತಿದ್ದನು.
2 ಆಗ ಯೆಹೋವನ ದೂತನು ಹೇಳಿದ್ದೇನೆಂದರೆ,
''ಯೆಹೋವನು ನಿನ್ನನ್ನು ಖಂಡಿಸಲಿ ಮತ್ತು ಟೀಕೆ
ಮಾಡಲಿ. ಯೆಹೋವನು ತನ್ನ ವಿಶೇಷ ನಗರವನ್ನಾಗಿ
ಜೆರುಸಲೇಮನ್ನು ಆರಿಸಿಕೊಂಡಿದ್ದಾನೆ. ಆ ನಗರವನ್ನು
ಆತನೇ ಕಾಪಾಡಿದನು. ಬೆಂಕಿಯಿಂದ ಎಳೆದು ತೆಗೆದ
ಕೊಳ್ಳಿಯಂತೆ ಆತನು ಅದನ್ನು ಕಾಪಾಡಿದನು.''
3 ಯೆಹೋಶುವನು ದೂತನ ಮುಂದೆ ನಿಂತುಕೊಂಡಿ
ದ್ದನು. ಅವನ ವಸ್ತ್ರವು ಮಲಿನವಾಗಿತ್ತು. 4 ಆಗ ಆ ದೂತನು
ಪಕ್ಕದಲ್ಲಿ ನಿಂತಿದ್ದ ಬೇರೆ ದೂತರನ್ನುದ್ದೇಶಿಸಿ, ''ಯೆಹೋ
ಶುವನ ಮೇಲಿರುವ ಮೈಲಿಗೆ ವಸ್ತ್ರವನ್ನು ತೆಗೆಯಿರಿ''
ಎಂದು ಹೇಳಿದನು. ಆಗ ದೂತನು ಯೆಹೋಶುವನಿಗೆ,
''ನಾನು ನಿನ್ನ ದೋಷಗಳನ್ನು ತೊಳೆದುಬಿಟ್ಟಿರುವೆ. ಈಗ
ನಾನು ನಿನಗೆ ಹೊಸ ಬಟ್ಟೆಗಳನ್ನು ಕೊಡುತ್ತೇನೆ'' ಎಂದು
ಹೇಳಿದನು.
5 ಆಗ ನಾನು, ''ಅವನ ತಲೆಯ ಮೇಲೆ ಶುಚಿಯಾದ
ಪೇಟವನ್ನಿಡಿರಿ'' ಎಂದು ಹೇಳಿದಾಗ ಅವರು ಅವನಿಗೆ
ಶುಭ್ರವಾದ ಪೇಟವನ್ನು ಇಟ್ಟರು. ಯೆಹೋವನ
ದೂತನು ಅಲ್ಲಿ ನಿಂತಿದ್ದಾಗಲೇ ಅವನಿಗೆ ನಿರ್ಮಲವಾದ
ಬಟ್ಟೆಗಳನ್ನು ಧರಿಸಲು ಕೊಟ್ಟರು. 6 ಆಗ ಯೆಹೋವನ
ದೂತನು ಯೆಹೋಶುವನಿಗೆ ಹೀಗೆ ಹೇಳಿದನು.

7 ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ,
''ನಾನು ಹೇಳುವ ರೀತಿಯಲ್ಲಿ ಜೀವಿಸು. ನಾನು
ಹೇಳುವ ರೀತಿಯಲ್ಲಿ ನಡೆ. ನೀನು ನನ್ನ ಆಲಯದ
ಮುಖ್ಯಾಧಿಕಾರಿಯಾಗುವಿ. ಅದರ ಅಂಗಣ
ಗಳನ್ನು ನೀನು ನೋಡಿಕೊಳ್ಳುವಿ. ಇಲ್ಲಿ ನಿಂತಿರುವ
ವರೊಂದಿಗೆ ನೀನು ಪ್ರವೇಶಿಸಬಹುದು.
8 ಪ್ರಧಾನ ಯಾಜಕನಾದ ಯೆಹೋಶುವನೇ, ಅವ
ನೊಂದಿಗೆ ಸೇವೆ ಮಾಡುವ ಇತರ ಯಾಜಕರೇ,
ನನ್ನ ಮಾತಿಗೆ ಕಿವಿಗೊಡಿರಿ. ಈ ಗಂಡಸರು ಮುಂದೆ
ಏನಾಗಬಹುದೆಂಬುದಕ್ಕೆ ನಿದರ್ಶನವಾಗಿದ್ದಾರೆ.
ಆಗ ನಾನು ನನ್ನ ವಿಶೇಷ ಸೇವಕನನ್ನು ಕರೆ
ತರುವೆನು. ಆತನ ಹೆಸರು ಕೊಂಬೆ.
9 ನೋಡು, ನಾನು ಯೆಹೋಶುವನ ಮುಂದೆ
ಒಂದು ವಿಶೇಷ ಕಲ್ಲನ್ನಿಡುವೆನು. ಆ ಕಲ್ಲಿನಲ್ಲಿ ಏಳು
ಬದಿಗಳಿವೆ. ನಾನು ಆ ವಿಶೇಷ ಕಲ್ಲಿನ ಮೇಲೆ
ವಿಶೇಷ ಸಂದೇಶವನ್ನು ಕೆತ್ತುವೆನು. ನಾನು ಆ
ದೇಶದ ಪಾಪವನ್ನು ಒಂದು ದಿವಸದಲ್ಲಿ ತೆಗೆದು
ಹಾಕುವೆನೆಂದು ಅದು ತೋರಿಸುವದು.''
10 ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ:
''ಆ ದಿವಸಗಳಲ್ಲಿ ಜನರು ತಮ್ಮ ಸ್ನೇಹಿತರೊಂದಿಗೆ
ಆರಾಮವಾಗಿ ಕುಳಿತುಕೊಂಡು ಸಂಭಾಷಿಸುವರು.
ಅಂಜೂರದ ಮರದ ನೆರಳಿನಲ್ಲಿಯೂ ದ್ರಾಕ್ಷಾ
ತೋಟಗಳ ನೆರಳಿನಲ್ಲಿಯೂ ಕುಳಿತುಕೊಂಡು
ಮಾತನಾಡಲು ಪರಸ್ಪರ ಆಮಂತ್ರಿಸುವರು.''

## ದೀಪಸ್ತಂಭವೂ, ಎರಡು ಆಲೀವ ಮರಗಳೂ

4 ನನ್ನೊಡನೆ ಮಾತನಾಡುತ್ತಿದ್ದ ದೇವದೂತನು
ಬಂದು ನನ್ನನ್ನೆಬ್ಬಿಸಿದನು. ನಾನು ನಿದ್ರೆಯಿಂದ
ಎದ್ದೇಳುವವನಂತೆ ಇದ್ದೆನು. 2 ಆಗ ದೂತನು, ''ಏನು
ನೋಡುತ್ತೀ?'' ಎಂದು ಪ್ರಶ್ನಿಸಿದನು.
ಆಗ ನಾನು ''ಬಂಗಾರದ ದೀಪಸ್ತಂಭವನ್ನು ನೋಡು
ತ್ತಿದ್ದೇನೆ. ಆ ಸ್ತಂಭದಲ್ಲಿ ಏಳು ದೀಪಗಳಿವೆ. ದೀಪಸ್ತಂಭದ
ಮೇಲೆ ಒಂದು ಬೋಗುಣಿ ಇದೆ. ಆ ಬೋಗುಣಿಯಿಂದ

ಏಳು ನಳಿಗೆಗಳು ಪ್ರತೀ ದೀಪಕ್ಕೆ ಹೋಗುತ್ತವೆ.
ಬೋಗುಣಿಯಲ್ಲಿಟ್ಟ ಎಣ್ಣೆಯು ಆ ನಳಿಗೆಯ ಮೂಲಕ
ದೀಪಕ್ಕೆ ಸುರಿಯುತ್ತಿತ್ತು. 3ಆ ಬೋಗುಣಿಯ ಬಳಿಯಲ್ಲಿ
ಎರಡು ಆಲೀವ್ ಮರಗಳಿದ್ದವು. ಒಂದು ಬಲ ಬದಿ
ಯಲ್ಲಿಯೂ, ಇನ್ನೊಂದೂ ಎಡ ಬದಿಯಲ್ಲಿಯೂ ಇತ್ತು.
ಈ ಮರಗಳು ದೀಪಗಳಿಗೆ ಬೇಕಾದ ಎಣ್ಣೆಯನ್ನು
ತಯಾರುಮಾಡುತ್ತಿದ್ದವು.'' 4ಆಗ ನಾನು ನನ್ನ ಜೊತೆ
ಮಾತನಾಡುತ್ತಿದ್ದ ದೂತನೊಡನೆ, ''ಸ್ವಾಮಿ, ಇವುಗಳ
ಅರ್ಥವೇನು?'' ಎಂದು ಕೇಳಿದೆನು.
5ಅವನು ಹೀಗೆ ಹೇಳಿದನು: ''ಈ ವಿಷಯಗಳು
ಏನೆಂದು ನಿನಗೆ ತಿಳಿಯಲಿಲ್ಲವೇ?''
ನಾನು ''ಇಲ್ಲ'' ಅಂದೆನು.
6ಅವನು ಅದಕ್ಕೆ ಉತ್ತರಿಸಿ, ''ಇದು ಯೆಹೋವನಿಂದ
ಜೆರುಬ್ಬಾಬೆಲಿಗೆ ಕೊಟ್ಟ ಸಂದೇಶವಾಗಿದೆ. 'ನಿನ್ನ ಸಹಾ
ಯವು ನಿನ್ನ ಸ್ವಂತ ಶಕ್ತಿ ಸಾಮರ್ಥ್ಯದಿಂದ ಬರುವದಿಲ್ಲ.
ಅದು ನಿನ್ನ ಆತ್ಮದಿಂದಲೇ ನಿನಗೆ ದೊರಕುವದು.' ಇದು
ಸರ್ವಶಕ್ತನಾದ ಯೆಹೋವನ ನುಡಿ. 7ಉನ್ನತವಾದ
ಶಿಖರವು ಜೆರುಬ್ಬಾಬೆಲಿಗೆ ಸಮತಟ್ಟಾದ ನೆಲದಂತಿರು
ವದು. ಅವನು ಆಲಯವನ್ನು ಕಟ್ಟುವನು. ಅದರ ಅತಿ
ವಿಶೇಷವಾದ ಕಲ್ಲನ್ನಿಟ್ಟ ಬಳಿಕ ಜನರೆಲ್ಲರೂ 'ಬಹಳ
ಚಂದ, ಬಹಳ ಚಂದ' ಎಂದು ಆರ್ಭಟಿಸುವರು.''
8ನನಗೆ ಯೆಹೋವನ ಸಂದೇಶವೂ ಸಹ ಹೀಗೆ
ಹೇಳಿತು: 9''ಜೆರುಬ್ಬಾಬೆಲ್ ನನ್ನ ಆಲಯದ ಅಸ್ತಿವಾರ
ವನ್ನು ಹಾಕುವನು. ಜೆರುಬ್ಬಾಬೆಲ್ ಆಲಯವನ್ನು ಕಟ್ಟಿ
ಮುಗಿಸುವನು. ಆಗ ನೀವು ಸರ್ವಕ್ತನಾದ ಯೆಹೋವನು
ನಿಮ್ಮ ಬಳಿಗೆ ನನ್ನನ್ನು ಕಳುಹಿಸಿದ್ದಾನೆಂದು ತಿಳಿಯುವಿರಿ.
10ಒಂದು ಸಣ್ಣ ರೀತಿಯ ಪ್ರಾರಂಭಕ್ಕೆ ಜನರು ನಾಚುವ
ದಿಲ್ಲ. ಜೆರುಬ್ಬಾಬೆಲ್ ನೂಲುಗುಂಡು ಹಿಡಿದುಕೊಂಡು
ಸಂಪೂರ್ಣವಾದ ಆಲಯವನ್ನು ಅಳತೆ ಮಾಡುವಾಗ
ಜನರು ಅತಿಯಾಗಿ ಸಂತೋಷಿಸುವರು. ಈಗ ಆ ಕಲ್ಲಿನ
ಏಳು ಬದಿಗಳು ಯೆಹೋವನ ಕಣ್ಣುಗಳು ಎಲ್ಲಾ ದಿಕ್ಕು
ಗಳನ್ನು ನೋಡುತ್ತಿರುವುದನ್ನು ಸೂಚಿಸುತ್ತವೆ. ಅವು
ಭೂಲೋಕದಲ್ಲಿರುವ ಎಲ್ಲಾ ಸಂಗತಿಗಳನ್ನು ನೋಡು
ತ್ತಿವೆ.'' 11ಆಗ ಜೆಕರ್ಯನಾದ ನಾನು ಅವನಿಗೆ ಹೇಳಿದ್ದೇ
ನೆಂದರೆ, ''ನಾನು ದೀಪಸ್ತಂಭದ ಬಲಗಡೆಯಲ್ಲಿ ಒಂದು
ಆಲೀವ್ ಮರವನ್ನು ಎಡಗಡೆಯಲ್ಲಿ ಇನ್ನೊಂದು
ಆಲೀವ್ ಮರವನ್ನು ನೋಡಿದೆನು. ಇವುಗಳು ಏನನ್ನು
ಸೂಚಿಸುತ್ತವೆ?'' 12ತಿರಿಗಿ ನಾನು ಅವನಿಗೆ, ''ನಾನು ಆ
ಎರಡು ಬಂಗಾರದ ನಳಿಗೆಯ ಬದಿಯಲ್ಲಿ ಆಲೀವ್
ಮರದ ಎರಡು ಕೊಂಬೆಗಳನ್ನು ನೋಡಿದೆನು. ಅದರಿಂದ
ಬಂಗಾರದ ಬಣ್ಣದ ಎಣ್ಣೆಯು ಹರಿಯುತ್ತಿತ್ತು. ಇವುಗಳ
ಅರ್ಥವೇನು?''
13ಆಗ ದೇವದೂತನು ಹೇಳಿದ್ದೇನೆಂದರೆ, ''ಇವು
ಏನನ್ನು ಸೂಚಿಸುತ್ತವೆ ಎಂದು ನಿನಗೆ ತಿಳಿಯದೋ?''
ಅದಕ್ಕೆ ನಾನು, ''ಇಲ್ಲ'' ಅಂದೆನು.
14ಆಗ ಅವನು, ''ಈ ಪ್ರಪಂಚದಲ್ಲಿ ಯೆಹೋವನು ತನ್ನ
ಸೇವೆಮಾಡಲು ಆರಿಸಿಕೊಂಡ ಇಬ್ಬರು ಮನುಷ್ಯರನ್ನು
ಅವು ಪ್ರತಿನಿಧಿಸುತ್ತವೆ'' ಅಂದನು.

## ಹಾರುವ ಸುರುಳಿ

5 ನಾನು ತಿರುಗಿ ಮೇಲಕ್ಕೆ ನೋಡಿದಾಗ ಒಂದು
ಹಾರುವ ಸುರುಳಿಯನ್ನು ಕಂಡೆನು. 2''ಏನನ್ನು
ನೋಡುತ್ತೀ?'' ಎಂದು ದೇವದೂತನು ಕೇಳಿದನು.
''ಒಂದು ಹಾರುವ ಸುರುಳಿ, ಅದು ಮೂವತ್ತು ಅಡಿ
ಉದ್ದ, ಹದಿನೈದು ಅಡಿ ಅಗಲವಿದೆ''ಎಂದು ನಾನು
ಉತ್ತರಿಸಿದೆನು. 3ಆಗ ದೇವದೂತನು ನನಗೆ ಹೇಳಿದ್ದೇ
ನೆಂದರೆ, ''ಆ ಸುರುಳಿಯಲ್ಲಿ ಒಂದು ಶಾಪವು ಬರೆಯಲ್ಪ
ಟ್ಟಿದೆ. ಸುರುಳಿಯ ಒಂದು ಬದಿಯಲ್ಲಿ ಕದಿಯುವ
ಜನರಿಗೆ ಶಾಪ ಬರೆಯಲ್ಪಟ್ಟಿದೆ. ಅದರ ಇನ್ನೊಂದು ಬದಿ
ಯಲ್ಲಿ ವಾಗ್ದಾನ ಮಾಡಿಯೂ ಅದನ್ನು ಪಾಲಿಸದೆ ಸುಳ್ಳಾ
ಡುವವರಿಗೆ ಶಾಪ ಬರೆಯಲ್ಪಟ್ಟಿದೆ. 4ಸರ್ವಶಕ್ತನಾದ
ಯೆಹೋವನು ಹೇಳುವದೇನೆಂದರೆ, ''ನಾನು ಆ ಸುರುಳಿ
ಯನ್ನು ಕದಿಯುವವರ ಮನೆಗಳಿಗೂ ಮತ್ತು ನನ್ನ ಹೆಸರಿನ
ಮೇಲೆ ಸುಳ್ಳಾಣೆ ಯಿಡುವವರ ಮನೆಗಳಿಗೂ ಕಳುಹಿಸು
ವೆನು. ಆ ಸುರು ಳಿಯು ಅಲ್ಲಿಯೇ ಇದ್ದು ಆ ಮನೆಗಳನ್ನು
ನಾಶ ಮಾಡುವದು. ಮನೆಯ ಕಲ್ಲು ಕಂಬಗಳನ್ನು ಮರದ
ತೊಲೆಗಳನ್ನು ನಾಶಮಾಡುವದು.''

## ಸ್ತ್ರೀ ಮತ್ತು ಬುಟ್ಟಿ

5ನನ್ನೊಡನೆ ಮಾತನಾಡುತ್ತಿದ್ದ ದೇವದೂತನು
ಹೊರಗೆ ಹೋದನು . ಆಗ ಅವನು, ''ನೋಡು, ನಮ್ಮ
ಬಳಿಗೆ ಏನು ಬರುತ್ತಿದೆ ಎಂದು ನೋಡು'' ಎಂದನು.
6''ಅದು ಏನೋ ನನಗೆ ಗೊತ್ತಾಗುತ್ತಿಲ್ಲ. ಅದು ಏನಿರ
ಬಹುದು?'' ಎಂದು ನಾನು ವಿಚಾರಿಸಿದೆನು. ಅದಕ್ಕವನು,
''ಅದು ಒಂದು ಅಳೆಯುವ ಬುಟ್ಟಿ. ಈ ಬುಟ್ಟಿಯು ಈ
ದೇಶದ ಜನರ ಪಾಪವನ್ನು ಅಳೆಯುವ ಬುಟ್ಟಿಯಾಗಿದೆ''
ಎಂದನು. 7ಸೀಸದಿಂದ ಮಾಡಲ್ಪಟ್ಟ ಒಂದು ಮುಚ್ಚಳ
ವನ್ನು ಆ ಬುಟ್ಟಿಯಿಂದ ತೆಗೆಯಲಾಯಿತು. ಆಗ ಅದ
ರೊಳಗೆ ಒಂದು ಹೆಂಗಸು ಇರುವುದನ್ನು ಕಂಡೆನು. 8ಆಗ
ಆ ದೂತನು, ''ಆ ಸ್ತ್ರೀಯು ದುಷ್ಟತನವನ್ನು ಸೂಚಿಸು
ತ್ತಾಳೆ'' ಎಂದು ಹೇಳಿ ದೂತನು ಆ ಸ್ತ್ರೀಯನ್ನು ಬುಟ್ಟಿಯ
ತಳಕ್ಕೆ ನೂಕಿ, ಸೀಸದ ಮುಚ್ಚಳವನ್ನು ಹಾಕಿಬಿಟ್ಟನು. 9ಆ
ಬಳಿಕ ನಾನು ಮೇಲಕ್ಕೆ ನೋಡಿದಾಗ ಕೊಕ್ಕರೆಯಂತೆ
ರೆಕ್ಕೆಗಳಿರುವ ಎರಡು ಸ್ತ್ರೀಯರನ್ನು ಕಂಡೆನು. ಅವರು

ಹಾರುತ್ತಾ ರೆಕ್ಕೆಗಳಲ್ಲಿಯ ಗಾಳಿಯ ಸಹಾಯದಿಂದ ಬುಟ್ಟಿ
ಯನ್ನು ಎತ್ತಿಕೊಂಡು ಆಕಾಶದಲ್ಲಿ ಹಾರಿಕೊಂಡು
ಹೋದರು. 10ಆಗ ನಾನು ದೂತನೊಡನೆ, ‘‘ಅವರು
ಬುಟ್ಟಿಯನ್ನು ಎಲ್ಲಿಗೆ ತೆಗೆದುಕೊಂಡು ಹೋಗುತ್ತಿ
ದ್ದಾರೆ?’’ ಎಂದು ಪ್ರಶ್ನಿಸಿದೆನು. 11‘‘ಅವರು ಶಿನಾರಿನಲ್ಲಿ
ಅದಕ್ಕೊಂದು ಮನೆ ಕಟ್ಟುವ ದಕ್ಕಿದ್ದಾರೆ. ಮನೆಕಟ್ಟಿದ
ಬಳಿಕ ಆ ಬುಟ್ಟಿಯನ್ನು ಅವರು ಅದರೊಳಗಿಡುವರು’’
ಎಂದು ಹೇಳಿದನು.

## ನಾಲ್ಕು ರಥಗಳು

6 ನಾನು ತಿರುಗಿ ಮೇಲಕ್ಕೆ ನೋಡಿದಾಗ ನಾಲ್ಕು
ರಥಗಳು ನಾಲ್ಕು ಹಿತ್ತಾಳೆಯ ಪರ್ವತಗಳ ಮಧ್ಯೆ
ಓಡುವುದನ್ನು ಕಂಡೆನು. 2ಮೊದಲನೇ ರಥವನ್ನು ಕೆಂಪು
ಕುದುರೆಗಳು ಎಳೆಯುತ್ತಿದ್ದವು. ಎರಡನೇ ರಥವನ್ನು ಕಪ್ಪು
ಕುದುರೆಗಳು ಎಳೆಯುತ್ತಿದ್ದವು. 3ಬಿಳೀ ಕುದುರೆಗಳು
ಮೂರನೇ ರಥವನ್ನೂ, ಕೆಂಪು ಮಚ್ಚೆಗಳುಳ್ಳ ಕುದುರೆಗಳು
ನಾಲ್ಕನೇ ರಥವನ್ನು ಎಳೆಯುತ್ತಿದ್ದವು. 4‘‘ಇವು ಏನನ್ನು
ಸೂಚಿಸುತ್ತವೆ?’’ ಎಂದು ನನ್ನೊಡನೆ ಮಾತನಾಡುತ್ತಿದ್ದ
ದೂತನೊಡನೆ ವಿಚಾರಿಸಿದೆನು.
5ದೇವದೂತನು ಹೇಳಿದ್ದೇನೆಂದರೆ, ‘‘ಇವು ನಾಲ್ಕು
ಗಾಳಿಗಳು. ಅವು ಭೂಲೋಕದ ಒಡೆಯನ ಬಳಿಯಿಂದ
ಈಗ ತಾನೇ ಬಂದವು. 6ಕಪ್ಪು ಕುದುರೆಗಳು ಉತ್ತರದಿಕ್ಕಿಗೆ
ಹೋಗುವವು. ಕೆಂಪು ಕುದುರೆಗಳು ಪೂರ್ವದಿಕ್ಕಿಗೆ
ಹೋಗುವವು. ಬಿಳಿ ಕುದುರೆಗಳು ಪಶ್ಚಿಮಕ್ಕೂ ಮಚ್ಚೆ
ಯಿರುವ ಕುದುರೆಗಳು ದಕ್ಷಿಣ ದಿಕ್ಕಿಗೂ ಹೋಗುವವು.’’
7ಕೆಂಪು ಮಚ್ಚೆ ಇರುವ ಕುದುರೆಗಳು ತಮಗೆ ನೇಮಕ
ವಾದ ಜಾಗಕ್ಕೆ ಹೋಗಿ ಅದನ್ನು ನೋಡಲು ಆತುರ
ಗೊಂಡಿದ್ದವು. ಆಗ ದೂತನು ಅವುಗಳಿಗೆ, ‘‘ಹೋಗಿ,
ಭೂಮಿಯ ಮೇಲೆ ಹೋಗಿ ಬನ್ನಿ’’ ಎಂದು ಹೇಳಿದಾಗ
ಅವುಗಳು ಹೋಗಿ ತಮ್ಮ ಪ್ರಾಂತ್ಯದಲ್ಲಿ ನಡೆದಾಡಿದವು.
8ಆಗ ಯೆಹೋವನು ನನ್ನನ್ನು ಗಟ್ಟಿಯಾಗಿ ಕರೆದು,
‘‘ನೋಡು, ಆ ಉತ್ತರ ದಿಕ್ಕಿಗೆ ಹೋಗುತ್ತಿದ್ದ ಆ ಕುದುರೆ
ಗಳು ತಮ್ಮ ಕೆಲಸವನ್ನು ಬಾಬಿಲೋನಿನಲ್ಲಿ ಮುಗಿಸಿವೆ.
ಅವು ನನ್ನ ಆತ್ಮವನ್ನು ಶಾಂತಗೊಳಿಸಿವೆ. ಈಗ ನಾನು
ಕೋಪಗೊಂಡಿಲ್ಲ.’’

## ಪ್ರಧಾನ ಯಾಜಕನಾದ ಯೆಹೋಶುವನು ಕಿರೀಟ ಹೊಂದುವನು

9ಆಗ ತಿರುಗಿ ನಾನು ಯೆಹೋವನಿಂದ ಸಂದೇಶ
ವನ್ನು ಪಡಕೊಂಡೆನು. 10ಆತನು ಹೇಳಿದ್ದೇನೆಂದರೆ,
‘‘ಹೆಲ್ದಾಯ, ತೋಬೀಯ ಮತ್ತು ಯೆದಾಯ ಇವರು
ಬಾಬಿಲೋನಿನಿಂದ ಸೆರೆಯಾಳುಗಳಾಗಿ ಬಂದಿರುತ್ತಾರೆ.
ಅವರಿಂದ ಬೆಳ್ಳಿ ಬಂಗಾರವನ್ನು ತೆಗೆದುಕೊಂಡು ಚೆಫನ್ಯನ
ಮಗನಾದ ಯೋಷೀಯನ ಮನೆಗೆ ಹೋಗಿರಿ. 11ಆ ಬೆಳ್ಳಿ
ಬಂಗಾರಗಳಿಂದ ಒಂದು ಕಿರೀಟವನ್ನು ಮಾಡಿ
ಯೆಹೋಶುವನ ತಲೆಯ ಮೇಲಿಟ್ಟು ಅವನಿಗೆ ಹೀಗೆ
ಹೇಳಿರಿ. (ಯೆಹೋಶುವನು ಪ್ರಧಾನ ಯಾಜಕ
ನಾಗಿದ್ದನು. ಇವನ ತಂದೆ ಯೆಹೋಜಾದಾಕನು);

12 ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ,
‘‘ಕೊಂಬೆ ಎಂಬ ಒಬ್ಬಾತನು ಇದ್ದಾನೆ. ಅವನು
ಬೆಳೆದು ಬಲಿಷ್ಠನಾಗುವನು. ಆತನು ದೇವಾಲಯ
ವನ್ನು ಕಟ್ಟುವನು.
13 ಆತನು ದೇವಾಲಯವನ್ನು ಕಟ್ಟುವನು, ಮತ್ತು
ಗೌರವವನ್ನು ಹೊಂದುವನು. ತನ್ನ ಸಿಂಹಾಸನದ
ಮೇಲೆ ಕುಳಿತುಕೊಂಡು ರಾಜ್ಯವನ್ನು ಆಳುವನು.
ಒಬ್ಬ ಯಾಜಕನು ಆತನ ಸಿಂಹಾಸನದ ಬಳಿಯಲ್ಲಿ
ನಿಂತುಕೊಂಡಿರುವನು. ಅವರಿಬ್ಬರೂ ಸಮಾಧಾನ
ದಿಂದ ಕೆಲಸ ಮಾಡುವರು.

14‘‘ಜನರು ಸ್ಮರಿಸಿಕೊಳ್ಳುವಂತೆ ಅವರು ಆ ಕಿರೀಟವನ್ನು
ಆಲಯದೊಳಗೆ ಇಡುವರು. ಅದು ಹೆಲ್ದಾಯ,
ತೋಬೀಯ, ಯೆದಾಯ ಮತ್ತು ಚೆಫನ್ಯನ ಮಗನಾದ
ಹೇನ್‌ನಿಗೆ ಘನತೆಯನ್ನು ತರುವುದು. 15ದೂರದಲ್ಲಿ
ವಾಸಿಸುವ ಜನರು ಬಂದು ಆಲಯವನ್ನು ಕಟ್ಟುವರು. ಆಗ
ಯೆಹೋವನು ನನ್ನನ್ನು ನಿಮ್ಮ ಬಳಿಗೆ ಕಳುಹಿಸಿದ್ದಾನೆಂದು
ನೀವು ತಿಳಿಯುವಿರಿ. ಯೆಹೋವನು ಹೇಳಿದಂತೆ ನೀವು
ಮಾಡಿದರೆ ಇವೆಲ್ಲಾ ನೆರವೇರುವುದು.’’

## ಯೆಹೋವನಿಗೆ ದಯೆ ಕರುಣೆಗಳು ಬೇಕಾಗಿವೆ

7 ಪರ್ಶಿಯದ ಅರಸನಾದ ದಾರ್ಯಾವೆಷನ ಆಳ್ವಿಕೆಯ
ನಾಲ್ಕನೇ ವರುಷದ, ಒಂಭತ್ತನೇ ತಿಂಗಳಿನ
(ಕಿಸ್ಲೇವ್) ನಾಲ್ಕನೇ ದಿವಸದಲ್ಲಿ ಯೆಹೋವನ
ಸಂದೇಶವನ್ನು ಜೆಕರ್ಯನು ಹೊಂದಿದನು. 2ಬೇತೇಲಿನ
ಜನರು ಸರೆಚರ್, ರೆಗೆಮ್-ಮೆಲೆಕ್ ಮತ್ತು ಅವರ
ಜನರನ್ನು ಯೆಹೋವನಿಗೆ ಒಂದು ಪ್ರಶ್ನೆಯನ್ನು ಕೇಳಲು
ಕಳುಹಿಸಿದರು. 3ಅವರು ಸರ್ವಶಕ್ತನಾದ ಯೆಹೋವನ
ಆಲಯದಲ್ಲಿದ್ದ ಯಾಜಕರ ಬಳಿಗೂ ಪ್ರವಾದಿಗಳ
ಬಳಿಗೂ ಹೋದರು. ಅವರು ಹೀಗೆ ಪ್ರಶ್ನೆ ಕೇಳಿದರು:
‘‘ಅನೇಕ ವರುಷಗಳಿಂದ ಆಲಯವು ಕೆಡವಲ್ಪಟ್ಟದ್ದಕ್ಕಾಗಿ
ನಮ್ಮ ದುಃಖವನ್ನು ತೋರಿಸಿದೆವು. ಪ್ರತೀ ವರುಷದ
ಐದನೇ ತಿಂಗಳಿನಲ್ಲಿ ಉಪವಾಸಕ್ಕಾಗಿ ಮತ್ತು
ರೋಧಿಸುವುದಕ್ಕಾಗಿ ನಾವು ಪ್ರತ್ಯೇಕ ಸಮಯವನ್ನು
ನೇಮಿಸುತ್ತಿದ್ದೆವು. ನಾವು ಇದನ್ನು ಹೀಗೆಯೇ ಮುಂದು
ವರಿಸಬೇಕೋ?’’

4ಆಗ ನನಗೆ ಸರ್ವಶಕ್ತನಾದ ಯೆಹೋವನಿಂದ ಈ
ಸಂದೇಶವು ದೊರಕಿತು: 5‘‘ಯಾಜಕರಿಗೂ, ದೇಶದ
ಇತರ ಜನರಿಗೂ ಇದನ್ನು ಹೇಳು, ಎಪ್ಪತ್ತು ವರುಷಗಳ
ತನಕ ನೀವು ಐದನೇ ಮತ್ತು ಏಳನೇ ತಿಂಗಳಿನಲ್ಲಿ ನಿಮ್ಮ
ದುಃಖವನ್ನು ಉಪವಾಸ ಮಾಡುವದರಲ್ಲಿ ತೋರಿಸಿದಿರಿ.
ಆದರೆ ಮಾಡಿದ ಆ ಉಪವಾಸವು ನಿಜವಾಗಿಯೂ ನನ
ಗಾಗಿಯೋ? ಇಲ್ಲ! 6ನೀವು ತಿಂದು ಕುಡಿದಾಗ ಅದು
ನನಗಾಗಿ ಇತ್ತೋ? ಇಲ್ಲ. ಅದು ನಿಮ್ಮ ಒಳ್ಳೆಯ
ದಕ್ಕಾಗಿಯೇ ಇತ್ತು. 7ಇದನ್ನು ತಿಳಿಸುವುದಕ್ಕಾಗಿಯೇ
ದೇವರು ಹಿಂದಿನ ಕಾಲದಲ್ಲಿ ಪ್ರವಾದಿಗಳನ್ನು ಉಪ
ಯೋಗಿಸಿದ್ದನು. ಜೆರುಸಲೇಮ್ ಜನಭರಿತವಾದ ಪಟ್ಟಣ
ವಾಗಿದ್ದಾಗ ದೇವರು ಇದನ್ನು ಜನರಿಗೆ ತಿಳಿಸಿದ್ದನು.
ಜೆರುಸಲೇಮಿನ ಸುತ್ತಮುತ್ತ ಇರುವ ಪಟ್ಟಣಗಳಲ್ಲಿ
ಜನರು ವಾಸಿಸುತ್ತಿದ್ದ ಸಮಯದಲ್ಲಿ ದೇವರು ಇದನ್ನು
ತಿಳಿಸಿದ್ದನು. ನೆಗೆವ್ ನಲ್ಲಿಯೂ ಪಶ್ಚಿಮದ ಪರ್ವತಗಳ
ಬುಡದಲ್ಲಿಯೂ ದೇವರು ಇದನ್ನು ಜನರಿಗೆ
ತಿಳಿಸಿದ್ದನು.’’

8 ಇದು ಜೆಕರ್ಯನಿಗೆ ಯೆಹೋವನ ಸಂದೇಶ:

9 ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ:
‘‘ನೀವು ಯಾವದು ನ್ಯಾಯವೋ ಯಾವದು
ಯೋಗ್ಯವೋ ಅದನ್ನು ಮಾಡಬೇಕು. ನೀವು
ಒಬ್ಬರಿಗೊಬ್ಬರು ದಯೆ ಕರುಣೆಗಳನ್ನು ತೋರಿಸ
ಬೇಕು.

10 ವಿಧವೆಯರಿಗೂ ಅನಾಥರಿಗೂ ಹಾನಿಮಾಡ
ಬೇಡಿರಿ. ಅಪರಿಚಿತರಿಗೂ ಬಡವರಿಗೂ ಕೇಡು
ಮಾಡಬೇಡಿ. ಒಬ್ಬರಿಗೊಬ್ಬರು ಕೇಡು ಮಾಡಲು
ಯೋಚಿಸಲೂಬೇಡಿ!’’

11 ಆದರೆ ಆ ಜನರು ಈ ಮಾತುಗಳನ್ನು ಕೇಳಲಿಲ್ಲ.
ಆತನು ಹೇಳಿದ ಹಾಗೆ ನಡೆಯಲಿಲ್ಲ. ದೇವರು
ಹೇಳುವುದು ತಮಗೆ ಕೇಳದಂತೆ ತಮ್ಮ ಕಿವಿಗಳನ್ನು
ಮುಚ್ಚಿಕೊಂಡರು.

12 ಅವರು ಹಠಮಾರಿಗಳಾಗಿದ್ದರು. ನ್ಯಾಯವಿಧಿ
ಗಳಿಗೆ ಅವರು ವಿಧೇಯರಾಗಲಿಲ್ಲ. ಸರ್ವಶಕ್ತ
ನಾದ ಯೆಹೋವನು ತನ್ನ ಆತ್ಮನಿಂದ ಪ್ರವಾದಿಗಳ
ಮೂಲಕ ಅವರಿಗೆ ಸಂದೇಶ ಕಳುಹಿಸಿದನು.
ಆದರೂ ಜನರು ಅವರಿಗೆ ಕಿವಿಗೊಡಲಿಲ್ಲ. ಆದುದ
ರಿಂದ ಸರ್ವಶಕ್ತನಾದ ಯೆಹೋವನು ಬಹಳ
ಕೋಪಗೊಂಡನು.

13 ಆತನು ಹೇಳಿದ್ದೇನೆಂದರೆ, ‘‘ನಾನು ಅವರನ್ನು
ಕರೆದರೂ ಅವರು ನನಗೆ ಕಿವಿಗೊಡಲಿಲ್ಲ. ಆದ್ದ
ರಿಂದ ಈಗ ಅವರು ನನ್ನನ್ನು ಕರೆದರೂ ನಾನು
ಅವರಿಗೆ ಉತ್ತರ ಕೊಡೆನು.

14 ನಾನು ಇತರ ಜನಾಂಗಗಳನ್ನು ಬಿರುಗಾಳಿಯಂತೆ
ಅವರ ಬಳಿಗೆ ಕಳುಹಿಸುವೆನು. ಆ ರಾಷ್ಟ್ರಗಳನ್ನು
ಅವರು ತಿಳಿದಿರಲಿಲ್ಲ. ಆದರೆ ಆ ದೇಶಗಳವರು
ಇವರ ದೇಶವನ್ನು ದಾಟಿ ಹೋಗುವಾಗ ಆ
ಸುಂದರವಾದ ದೇಶವು ನಾಶವಾಗುವದು.’’

### ಜೆರುಸಲೇಮನ್ನು ಆಶೀರ್ವದಿಸುವೆನು ಎಂಬ ಯೆಹೋವನ ವಾಗ್ದಾನ

8 ಸರ್ವಶಕ್ತನಾದ ಯೆಹೋವನ ಸಂದೇಶ: 2ಸರ್ವಶಕ್ತ
ನಾದ ಯೆಹೋವನು ಹೇಳುವದೇನೆಂದರೆ,
‘‘ಚೀಯೋನ್ ಪರ್ವತವನ್ನು ನಾನು ಸತ್ಯವಾಗಿಯೂ
ಪ್ರೀತಿಸುತ್ತೇನೆ. ನನಗೆ ನಂಬಿಗಸ್ತಳಾಗದಿದ್ದಾಗ ನಾನು
ಆಕೆಯ ಮೇಲೆ ಕೋಪಗೊಳ್ಳುವಷ್ಟರವರೆಗೆ ಪ್ರೀತಿಸು
ತ್ತೇನೆ.’’ 3ಯೆಹೋವನು ಹೇಳುವದೇನೆಂದರೆ, ‘‘ನಾನು
ಚೀಯೋನಿಗೆ ಹಿಂದಿರುಗಿ ಬಂದಿದ್ದೇನೆ. ನಾನು ಜೆರುಸ
ಲೇಮಿನಲ್ಲಿ ವಾಸಿಸುತ್ತೇನೆ. ಜೆರುಸಲೇಮ್ ನಂಬಿಗಸ್ತ
ನಗರವೆಂದು ಕರೆಯಲ್ಪಡುವದು. ಸರ್ವಶಕ್ತನ ಪರ್ವತವು
ಪವಿತ್ರ ಪರ್ವತವೆಂದು ಕರೆಯಲ್ಪಡುವದು.’’
4ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
‘‘ವೃದ್ಧ ವೃದ್ಧೆಯರು ಜೆರುಸಲೇಮಿನ ಸಾರ್ವಜನಿಕ ಸ್ಥಳ
ಗಳಲ್ಲಿ ತಿರುಗಿ ನೋಡಸಿಗುವರು. ಅವರು ಬಹು ದೀರ್ಘ
ಆಯುಷ್ಯವನ್ನು ಹೊಂದುವದರಿಂದ ಅವರಿಗೆ ಕೈಕೋಲು
ಬೇಕಾಗುತ್ತದೆ.’’ 5ನಗರದ ತುಂಬಾ ಬಾಲಬಾಲೆಯರು
ಆಡುವರು. 6ಅಳಿದುಳಿದುವರು ‘ಇದು ಆಶ್ಚರ್ಯಕರ’
ಎಂದು ಹೇಳುವರು. ನಾನೂ ಇದು ಆಶ್ಚರ್ಯಕರವೆಂದು
ತಿಳಿಯುತ್ತೇನೆ.’’
7ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
‘‘ನಾನು ಪೂರ್ವ ಪಶ್ಚಿಮದಲ್ಲಿರುವ ದೇಶಗಳೊಳಗಿಂದ
ನನ್ನ ಜನರನ್ನು ರಕ್ಷಿಸುವುದನ್ನು ನೋಡಿರಿ. 8ನಾನು
ಅವರನ್ನು ಇಲ್ಲಿಗೆ ಕರೆತರುವೆನು. ಅವರು ಜೆರುಸಲೇಮಿ
ನಲ್ಲಿ ವಾಸಿಸುವರು. ಅವರು ನನ್ನ ಜನರಾಗಿರುವರು ಮತ್ತು
ನಾನು ಅವರ ಒಳ್ಳೆ ನಂಬಿಗಸ್ತ ದೇವರಾಗಿರುವೆನು.’’
9ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
‘‘ಬಲಗೊಳ್ಳಿರಿ! ಸರ್ವಶಕ್ತನಾದ ಯೆಹೋವನು ತನ್ನ
ಆಲಯವನ್ನು ತಿರುಗಿ ಕಟ್ಟಲು ಅಸ್ತಿವಾರವನ್ನು ಹಾಕು
ವಾಗ ಪ್ರವಾದಿಗಳು ಕೊಟ್ಟ ಸಂದೇಶವನ್ನೇ ನೀವು ತಿರುಗಿ
ಕೇಳುತ್ತಿದ್ದೀರಿ! 10ಇದಕ್ಕಿಂತ ಮುಂಚೆ ಜನರ ಕೈಯಲ್ಲಿ
ಕೆಲಸಗಾರರಿಗೆ ಕೂಲಿಕೊಡುವದಕ್ಕಾಗಲೀ, ಪ್ರಾಣಿಗಳ
ಬಾಡಿಗೆ ಕೊಡುವದಕ್ಕಾಗಲೀ, ಹಣವಿರಲಿಲ್ಲ. ಅದೇ
ಸಮಯದಲ್ಲಿ ಜನರು ಹೋಗುತ್ತಾ ಬರುತ್ತಾ ಇರುವದಕ್ಕೆ
ಸುರಕ್ಷತೆ ಇರಲಿಲ್ಲ. ಎಲ್ಲಾ ತೊಂದರೆಗಳು ತೊರೆಯಲ್ಪ
ಡಲಿಲ್ಲ. ಪ್ರತಿ ಮನುಷ್ಯನು ತನ್ನ ನೆರೆಯವನ ಮೇಲೆ

ಎದುರು ಬೀಳುವಂತೆ ನಾನು ಮಾಡಿದ್ದೆನು. 11ಆದರೆ ಈಗ
ಹಾಗಿಲ್ಲ. ಅಳಿಯದೆ ಉಳಿದವರಿಗೆ ಹಾಗೆ ಆಗುವದಿಲ್ಲ.
ಇದು ಸರ್ವಶಕ್ತನಾದ ಯೆಹೋವನ ನುಡಿ. 12‘‘ಈ
ಜನರು ನೆಮ್ಮದಿಯಿಂದ ಭೂಮಿಯ ಮೇಲೆ ನೆಡೆಯು
ವರು. ಅವರ ದ್ರಾಕ್ಷಾಲತೆಗಳು ದ್ರಾಕ್ಷಿಹಣ್ಣನ್ನು ಕೊಡು
ವವು. ದೇಶವು ಸಮೃದ್ಧಿಯಾದ ಬೆಳೆಯನ್ನು ಕೊಡುವದು.
ಆಕಾಶವು ಮಳೆಯನ್ನು ಸುರಿಸುವದು. ಇವೆಲ್ಲವನ್ನು
ನಾನು ನನ್ನ ಜನರಿಗೆ ಕೊಡುವೆನು. 13ಜನರು ಇಸ್ರೇಲ್
ಮತ್ತು ಯೆಹೂದದ ಹೆಸರುಗಳನ್ನು ಶಾಪ ಇಡುವದಕ್ಕಾಗಿ
ಉಪಯೋಗಿಸುವರು. ಆದರೆ ನಾನು ಇಸ್ರೇಲ್ ಮತ್ತು
ಯೆಹೂದವನ್ನು ಸಂರಕ್ಷಿಸುವೆನು. ಆ ಹೆಸರುಗಳು
ಆಶೀರ್ವದಿಸುವದಕ್ಕಾಗಿ ಉಪಯೋಗಿಸಲ್ಪಡುವದು.
ಆದುದರಿಂದ ಭಯಪಡಬೇಡಿ, ಬಲಶಾಲಿಗಳಾಗಿರಿ.’’

14ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ, ‘‘ನಿಮ್ಮ ಪೂರ್ವಿಕರು ನನ್ನನ್ನು ಕೋಪಗೊಳಿಸಿ
ದರು. ಆದುದರಿಂದ ಅವರನ್ನು ನಾಶಮಾಡಲು ನಾನು
ತೀರ್ಮಾನಿಸಿದೆನು. ಮತ್ತು ಈ ತೀರ್ಮಾನವನ್ನು ಬದಲಾ
ಯಿಸುವದೇ ಇಲ್ಲವೆಂದು ನಿರ್ಧರಿಸಿದೆನು. 15ಆದರೆ ಈಗ
ನನ್ನ ನಿರ್ಧಾರವನ್ನು ಬದಲಾಯಿಸಿದ್ದೇನೆ. ಜೆರುಸಲೇ
ಮಿಗೂ ಯೆಹೂದದ ಜನರಿಗೂ ಒಳ್ಳೆಯದನ್ನೇ ಮಾಡು
ವೆನು. ಆದುದರಿಂದ ಭಯಪಡಬೇಡಿ. 16ಆದರೆ ನೀವು
ಮಾಡಬೇಕಾದದ್ದೇನೆಂದರೆ, ನಿಮ್ಮ ನೆರೆಯವರ ಸಂಗಡ
ಸತ್ಯವನ್ನೇ ಆಡಿರಿ. ನಿಮ್ಮ ನಗರಗಳಲ್ಲಿ ಯಾವುದೇ
ತೀರ್ಮಾನಗಳನ್ನು ಮಾಡುವುದಾಗಿದ್ದರೂ ಅವು ನ್ಯಾಯ
ವಾದವುಗಳಾಗಿಯೂ ಸತ್ಯವಾದವುಗಳಾಗಿಯೂ ಸಮಾ
ಧಾನವನ್ನು ತರುವಂತವುಗಳಾಗಿಯೂ ಇರಲಿ. 17ನಿಮ್ಮ
ನೆರೆಯವನಿಗೆ ಹಾನಿಮಾಡುವುದನ್ನು ಗುಟ್ಟಾಗಿ
ಆಲೋಚಿಸಬೇಡಿರಿ. ಸುಳ್ಳು ವಾಗ್ದಾನ ಮಾಡಬೇಡಿರಿ.
ಅವುಗಳನ್ನೆಲ್ಲಾ ಮಾಡುವದರಲ್ಲಿ ಆನಂದಿಸಬೇಡಿರಿ.
ಯಾಕೆಂದರೆ ಅವುಗಳನ್ನು ನಾನು ದ್ವೇಷಿಸುತ್ತೇನೆ.’’ ಇದು
ಯೆಹೋವನ ನುಡಿ.

18ಸರ್ವಶಕ್ತನಾದ ಯೆಹೋವನಿಂದ ನಾನು ಈ ಸಂದೇ
ಶವನ್ನು ಹೊಂದಿದೆನು. 19ಆತನು ಹೇಳುವದೇ ನೆಂದರೆ,
‘‘ನಾಲ್ಕನೇ, ಐದನೇ, ಏಳನೆ, ಮತ್ತು ಹತ್ತನೇ ತಿಂಗಳಿನಲ್ಲಿ
ನೀವು ದುಃಖದಿಂದ ಉಪವಾಸ ಮಾಡುವ ವಿಶೇಷ
ದಿವಸಗಳಿವೆ. ಆ ದುಃಖದ ದಿವಸಗಳು ನಿಮ್ಮ ಸಂತಸದ
ದಿವಸಗಳಾಗಿ ಪರಿಗಣಿಸಬೇಕು. ಮತ್ತು ನೀವು ಸತ್ಯವನ್ನೂ
ಸಮಾಧಾನವನ್ನೂ ಪ್ರೀತಿಸುವವರಾಗಬೇಕು.’’

20 ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ, ‘‘ಮುಂದಿನ ದಿವಸಗಳಲ್ಲಿ ಬೇರೆ ಬೇರೆ
ನಗರದ ಜನರು ಜೆರುಸಲೇಮಿಗೆ ಬರುವರು.
21 ಬೇರೆ ಬೇರೆ ನಗರದ ಜನರು ಪರಸ್ಪರ ವಂದಿಸು
ವರು. ಅವರಲ್ಲಿ ಕೆಲವರು, ‘ನಾವು ಸರ್ವಶಕ್ತನಾದ
ಯೆಹೋವನನ್ನು ಆರಾಧಿಸಲು ಹೋಗುತ್ತಿದ್ದೇವೆ’
ಅನ್ನುವರು. ಅದಕ್ಕೆ ಇನ್ನೊಬ್ಬನು, ‘‘ನಾನೂ
ನಿಮ್ಮೊಂದಿಗೆ ಬರುತ್ತೇನೆ’’ ಅನ್ನುವನು.

22ಎಷ್ಟೋ ಜನರು, ಎಷ್ಟೋ ಬಲಶಾಲಿ ಜನಾಂಗಗಳು
ಜೆರುಸಲೇಮಿಗೆ ಸರ್ವಶಕ್ತನಾದ ಯೆಹೋವನನ್ನು
ಕಂಡುಕೊಳ್ಳಲೂ, ಆತನನ್ನು ಆರಾಧಿಸಲೂ ಬರುವರು.
23ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ: ‘‘ಆ
ಸಮಯದಲ್ಲಿ ಬೇರೆ ಬೇರೆ ಭಾಷೆಗಳನ್ನು ಮಾತಾಡುವ
ಅನೇಕ ವಿದೇಶಿಯರು ಯೆಹೂದ್ಯನ ಬಳಿಗೆ ಬಂದು,
ಅವನ ಬಟ್ಟೆಯ ಅಂಚನ್ನು ಹಿಡಿದು, ‘‘ದೇವರು
ನಿಮ್ಮೊಂದಿಗಿದ್ದಾನೆಂದು ನಾವು ಕೇಳಿದ್ದೇವೆ. ನಿಮ್ಮೊಂದಿಗೆ
ನಾವೂ ಬಂದು ಆತನನ್ನು ಆರಾಧಿಸಬಹುದೋ?’’
ಎಂದು ಕೇಳುವರು.

## ಇತರ ಜನಾಂಗಗಳ ಮೇಲೆ ನ್ಯಾಯತೀರ್ಪು

9 ಯೆಹೋವನಿಂದ ಬಂದ ಸಂದೇಶ: ಹದ್ರಾಕ್
ದೇಶದ ಮತ್ತು ಅದರ ರಾಜಧಾನಿಯಾದ ದಮಸ್ಕ
ನಗರದ ವಿರುದ್ಧವಾಗಿ ಯೆಹೋವನ ಸಂದೇಶ:
‘‘ಇಸ್ರೇಲ್ ಕುಲದವರು ಮಾತ್ರವೇ ದೇವರನ್ನು ತಿಳಿದವ
ರಲ್ಲ. ಪ್ರತಿಯೊಬ್ಬರೂ ಸಹಾಯಕ್ಕಾಗಿ ಆತನಿಗೆ ಮೊರೆ
ಇಡುವರು. 2ಈ ಸಂದೇಶವು ಹಮಾತನಿಗೆ ವಿರುದ್ಧ
ವಾದದ್ದು. ಅವನ ಮೊರೆಯು ಹದ್ರಾಕ್ ದೇಶಕ್ಕೆ ತಾಗಿ
ಇದೆ. ಈ ಸಂದೇಶವು ತೂರ್ ಚೀದೋನ್‌ನಿನ ಜನರ
ವಿರುದ್ಧವಾಗಿಯೂ ಇದೆ. ಆ ಜನರು ಜ್ಞಾನಿಗಳೂ ಕುಶಲ
ಕರ್ಮಿಗಳೂ ಆಗಿರಬಹುದು. 3ತೂರ್ ಒಂದು ಕೋಟೆ
ಯಂತೆ ಕಟ್ಟಲ್ಪಟ್ಟಿದೆ. ಅಲ್ಲಿರುವ ಜನರು ಬೆಳ್ಳಿಯನ್ನು
ದೂಳಿನಂತೆ ಸಂಗ್ರಹಿಸಿರುತ್ತಾರೆ. ಬಂಗಾರವಂತೂ
ಮಣ್ಣಿನ ತರಹ ಸಾಮಾನ್ಯವಾಗಿರುತ್ತದೆ. 4ಆದರೆ ನಮ್ಮ
ಒಡೆಯನಾದ ಯೆಹೋವನು ಅದೆಲ್ಲವನ್ನು ತೆಗೆದು
ಕೊಳ್ಳುವನು. ಆಕೆಯ ನೌಕಾಬಲವನ್ನು ಮುರಿದು
ಬಿಡುವನು. ಮತ್ತು ಆ ನಗರವು ಬೆಂಕಿಯಿಂದ ನಾಶ
ವಾಗುವದು.

5‘‘ಅಷ್ಕೆಲೋನಿನ ಜನರು ಇದನ್ನು ನೋಡಿ ಭಯ
ಗ್ರಸ್ತರಾಗುವರು. ಗಾಜದ ಜನರು ಭಯದಿಂದ ನಡುಗು
ವರು. ಮತ್ತು ಎಕ್ರೋನಿನ ಜನರು ಇದನ್ನೆಲ್ಲಾ ನೋಡಿ
ನಿರೀಕ್ಷೆ ಇಲ್ಲದವರಾಗಿರುವರು. ಗಾಜದಲ್ಲಿ ಯಾವ
ಅರಸನೂ ಉಳಿಯನು. ಅಷ್ಕೆಲೋನಿನಲ್ಲಿ ಯಾರೂ
ವಾಸಿಸರು. 6ಅಷ್ಡೋದಿನ ಜನರಿಗೆ ತಮ್ಮ ತಂದೆ ಯಾರು
ಎಂದು ತಿಳಿಯರು. ನಾನು ಅಹಂಕಾರದ ಫಿಲಿಷ್ಟಿಯ

ಜನರನ್ನು ಸಂಪೂರ್ಣವಾಗಿ ನಾಶಮಾಡುತ್ತೇನೆ. [7]ಅವರು
ನಿಷಿದ್ಧ ಆಹಾರ ಪದಾರ್ಥವನ್ನಾಗಲೀ ರಕ್ತದಿಂದಿರುವ
ಮಾಂಸವನ್ನಾಗಲೀ ಇನ್ನು ಮುಂದೆ ತಿನ್ನುವದಿಲ್ಲ. ಫಿಲಿಷ್ಟಿ
ಯರಲ್ಲಿ ಯಾರಾದರೂ ಉಳಿದರೆ ಅವರು ನನ್ನ ಜನ
ರೊಂದಿಗೆ ಒಂದಾಗುವರು. ಎಕ್ರೋನಿನ ಯೆಬೂಸಿಯ
ರಂತೆ ಅವರು ಯೆಹೂದದ ಇನ್ನೊಂದು ಸಂತತಿಯವ
ರಾಗುವರು. ನಾನು ನನ್ನ ದೇಶವನ್ನು ಸಂರಕ್ಷಿಸುವೆನು.
[8]ಶತ್ರು ಸೈನ್ಯವು ಅದರೊಳಗಿಂದ ದಾಟಿಹೋಗಲು ನಾನು
ಬಿಡೆನು. ಇನ್ನು ಮುಂದೆ ನನ್ನ ಜನರಿಗೆ ಅವರು ಹಾನಿ
ಮಾಡದಂತೆ ಮಾಡುವೆನು. ಕಳೆದುಹೋದ ಸಮಯ
ಗಳಲ್ಲಿ ಅವರೆಷ್ಟು ಸಂಕಟ ಅನುಭವಿಸಿದರೆಂದು ನನ್ನ ಸ್ವಂತ
ಕಣ್ಣುಗಳಿಂದ ನೋಡಿರುತ್ತೇನೆ.''

### ಭವಿಷ್ಯತ್ತಿನ ಅರಸನು

9 ಚೀಯೋನ್ ನಗರಿಯೇ, ಹರ್ಷಿಸು! ಜೆರುಸ
ಲೇಮ್ ಜನರೇ, ಸಂತೋಷದಿಂದ ಆರ್ಭಟಿಸಿರಿ.
ನಿಮ್ಮ ಅರಸನು ನಿಮ್ಮ ಬಳಿಗೆ ಬರುತ್ತಿದ್ದಾನೆ!
ಆತನು ವಿಜಯಶಾಲಿಯಾದ ನೀತಿವಂತನಾಗಿ
ದ್ದಾನೆ. ಆದರೆ ದೀನನಂತೆ ಕತ್ತೆಯ ಮೇಲೆ,
ಹೌದು' ಕತ್ತೆಯ ಮರಿಯ ಮೇಲೆ ಸವಾರಿ ಮಾಡಿ
ಕೊಂಡು ಬರುವನು.

10 ಅರಸನು ಹೀಗನ್ನುತ್ತಾನೆ: ''ಎಫ್ರಾಯೀಮಿನಲ್ಲಿ
ರಥಗಳನ್ನೂ ಜೆರುಸಲೇಮಿನಲ್ಲಿ ಅಶ್ವರೂಢರಾದ
ಸೈನಿಕರನ್ನೂ ನಾಶಮಾಡಿದೆನು; ಯುದ್ಧದ ಬಿಲ್ಲು
ಗಳನ್ನು ತುಂಡು ಮಾಡಿದೆನು.''
ಆ ಅರಸನು ಸಮಾಧಾನದ ವರ್ತಮಾನವನ್ನು
ರಾಜ್ಯಗಳಿಗೆ ತರುವನು. ಸಮುದ್ರದಿಂದ ಸಮು
ದ್ರದ ತನಕ ಯುಫ್ರೇಟೀಸ್ ನದಿಯಿಂದ
ಭೂಮಿಯ ಕಟ್ಟಕಡೆಯವರೆಗೆ ಆತನು ರಾಜ್ಯವ
ನ್ನಾಳುವನು.

### ಯೆಹೋವನು ತನ್ನ ಜನರನ್ನು ಕಾಪಾಡುವನು

11 ಜೆರುಸಲೇಮೇ, ನಾವು ನಿನ್ನ ಒಡಂಬಡಿಕೆಗೆ ಮುದ್ರೆ
ಹಾಕಲು ರಕ್ತವನ್ನು ಉಪಯೋಗಿಸಿದೆವು. ಆದುದ
ರಿಂದ ನೆಲದ ಹೊಂಡದೊಳಗಿಂದ ಜನರನ್ನು
ಬಿಡುಗಡೆ ಮಾಡಿದ್ದೇನೆ.

12 ಸೆರೆಹಿಡಿಯಲ್ಪಟ್ಟವರೇ, ಮನೆಗೆ ಹೋಗಿ. ಈಗ
ನಿಮಗೊಂದು ನಿರೀಕ್ಷೆಯಿದೆ. ನಾನು ನಿಮಗೆ
ಖಂಡಿತವಾಗಿ ಹೇಳುವದೇನೆಂದರೆ, ನಾನು ತಿರುಗಿ
ಬರುತ್ತೇನೆ.

13 ಯೆಹೂದನೇ ನಾನು ನಿನ್ನನ್ನು ಬಿಲ್ಲಿನಂತೆ
ಉಪಯೋಗಿಸುವೆನು. ಎಫ್ರಾಯೀಮನೇ, ನಾನು
ನಿನ್ನನ್ನು ಬಾಣದಂತೆ ಉಪಯೋಗಿಸುವೆನು.
ಇಸ್ರೇಲೇ, ಗ್ರೀಸಿನ ಜನರೊಂದಿಗೆ ಯುದ್ಧ
ಮಾಡಲು ನಾನು ನಿನ್ನನ್ನು ಖಡ್ಗದಂತೆ ಉಪ
ಯೋಗಿಸುವೆನು.

14 ಯೆಹೋವನು ಅವರಿಗೆ ಕಾಣಿಸಿಕೊಂಡು ತನ್ನ
ಬಾಣವನ್ನು ಮಿಂಚಿನ ವೇಗದಲ್ಲಿ ಹಾರಿಸುವನು.
ನನ್ನ ಒಡೆಯನಾದ ಯೆಹೋವನು ತುತ್ತೂರಿ
ಊದಿದಾಗ ಮರುಭೂಮಿಯ ಬಿರುಗಾಳಿಯಂತೆ
ಸೈನ್ಯವು ಮುಂದಕ್ಕೆ ನುಗ್ಗುವುದು.

15 ಸರ್ವಶಕ್ತನಾದ ದೇವರು ಅವರನ್ನು ಕಾಪಾಡು
ವನು. ಸೈನಿಕರು ಶತ್ರುವನ್ನು ಜಯಿಸಲು ಕವಣೆ
ಮತ್ತು ಕಲ್ಲುಗಳನ್ನು ಉಪಯೋಗಿಸುವರು. ಶತ್ರು
ಗಳ ರಕ್ತವನ್ನು ಚೆಲ್ಲುವರು. ಅದು ದ್ರಾಕ್ಷಾರಸದಂತೆ
ಹರಿಯುವದು. ಅದು ಯಜ್ಞವೇದಿಕೆಯ ಮೂಲೆ
ಗಳಲ್ಲಿ ರಕ್ತವನ್ನು ಹೊಯಿದಂತೆ ಕಾಣುವದು.

16 ಆ ಸಮಯಗಳಲ್ಲಿ ದೇವರಾದ ಯೆಹೋವನು
ಕುರುಬನು ತನ್ನ ಕುರಿಗಳನ್ನು ಸಂರಕ್ಷಿಸುವ ರೀತಿ
ಯಲ್ಲಿ ತನ್ನ ಜನರನ್ನು ರಕ್ಷಿಸುವನು. ಅವರು
ಆತನಿಗೆ ಅಮೂಲ್ಯರಾಗಿರುವರು. ಆತನ ಕೈಯಲ್ಲಿ
ಹೊಳೆಯುವ ಆಭರಣದಂತಿರುವರು.

17 ಆಗ ಪ್ರತಿಯೊಂದೂ ಸುಂದರವೂ ರಮಣೀ
ಯವೂ ಆಗಿರುವದು. ಬೆಳೆಯು ಸುಭಿಕ್ಷವಾಗಿರು
ವದು. ಆಹಾರ ಮತ್ತು ದ್ರಾಕ್ಷಾರಸ ಮಾತ್ರವೇ
ಅಲ್ಲ. ಎಲ್ಲಾ ಯೌವನಸ್ಥರೂ ಯೌವನಸ್ಥೆಯರೂ
ಹಾಗೆಯೇ ಇರುವರು.

### ಯೆಹೋವನ ವಾಗ್ದಾನಗಳು

10 ವಸಂತ ಕಾಲದಲ್ಲಿ ಮಳೆಗಾಗಿ ಯೆಹೋವನಿಗೆ
ಪ್ರಾರ್ಥಿಸಿರಿ. ಯೆಹೋವನು ಮಿಂಚನ್ನು ಕಳುಹಿ
ಸುವನು; ಆಗ ಮಳೆ ಸುರಿಯುವುದು ಮತ್ತು ದೇವರು
ಎಲ್ಲರ ಹೊಲಗಳಲ್ಲಿ ಸಸಿಗಳು ಬೆಳೆಯುವಂತೆ
ಮಾಡುವನು.
[2]ಜನರು ಭವಿಷ್ಯವನ್ನು ತಿಳಿಯುವುದಕ್ಕೆ ತಮ್ಮ ಸಣ್ಣ
ಬೊಂಬೆಗಳನ್ನೋ ಮಂತ್ರಜಾಲವನ್ನೋ ಉಪಯೋಗಿ
ಸುವರು. ಆದರೆ ಅವೆಲ್ಲಾ ನಿಷ್ಪ್ರಯೋಜಕ. ಆ ಜನರು
ದರ್ಶನವನ್ನು ನೋಡುವರು ಮತ್ತು ಕನಸುಗಳ ಬಗ್ಗೆ
ಹೇಳುವರು. ಆದರೆ ಅವುಗಳೆಲ್ಲಾ ನಿಷ್ಪ್ರಯೋಜಕ ಸುಳ್ಳುಗ
ಳಾಗಿವೆ. ಆದ್ದರಿಂದ ಜನರು ಸಹಾಯಕ್ಕಾಗಿ ಕೂಗುತ್ತಾ
ಅತ್ತಿಂದಿತ್ತ ತಿರುಗಾಡುವ ಕುರಿಗಳಂತಿದ್ದಾರೆ. ಅವುಗಳನ್ನು
ನಡಿಸಲು ಕುರುಬರೇ ಇಲ್ಲ.
[3]ಯೆಹೋವನು ಹೇಳುವದೇನೆಂದರೆ, ''ನಾನು
ಕುರುಬರ ಮೇಲೆ ಬಹಳವಾಗಿ ಕೋಪಿಸಿರುವೆನು. ಆ

ನಾಯಕರನ್ನು ನಾನು ನನ್ನ ಜನರ ಮೇಲೆ ಜವಾಬ್ದಾರರ
ನ್ನಾಗಿ ಮಾಡಿದ್ದೇನೆ.’’ ಯೆಹೂದದ ಜನರು ದೇವರ
ಮಂದೆಯಾಗಿದ್ದಾರೆ. ಹೇಗೆ ಸಿಪಾಯಿಯು ತನ್ನ ಯುದ್ಧದ
ಕುದುರೆಯನ್ನು ಪರಾಮರಿಸುತ್ತಾನೋ ಹಾಗೆ ಸರ್ವಶಕ್ತ
ನಾದ ಯೆಹೋವನು ತನ್ನ ಮಂದೆಯನ್ನು ನಿಜವಾಗಿಯೂ
ಪರಾಮರಿಸುತ್ತಾನೆ.

4‘‘ಮೂಲೇ ಕಲ್ಲು, ಗುಡಾರದ ಗೂಟ, ಯುದ್ಧದ
ಬಿಲ್ಲು ಮತ್ತು ಮುನ್ನುಗ್ಗುವ ಸೈನ್ಯ, ಇವೆಲ್ಲವು ಒಟ್ಟಾಗಿ
ಯೆಹೂದದಿಂದ ಬರುವದು. 5ಇವರು ಶತ್ರುಗಳನ್ನು
ಜಯಿಸುವರು. ಸೈನಿಕರು ರಸ್ತೆಯ ಧೂಳಿನ ಮೇಲೆ
ಮುನ್ನಡೆದು ಯೆಹೋವನು ಅವರೊಂದಿಗಿರುವದರಿಂದ
ಅವರು ಅಶ್ವರೂಢನಾಗಿರುವ ಶತ್ರು ಸೈನ್ಯವನ್ನು ಸದೆಬಡಿ
ಯುವರು. 6ಯೆಹೂದ ವಂಶವನ್ನು ನಾನು ಬಲ
ಗೊಳಿಸುವೆನು. ಯೋಸೇಫನ ವಂಶದವರಿಗೆ ಜಯ
ವಾಗುವಂತೆ ಮಾಡುವೆನು. ನಾನು ಅವರನ್ನು ಹಿಂದಕ್ಕೆ
ಸುರಕ್ಷಿತವಾಗಿ ಕರಕೊಂಡು ಬರುವೆನು. ಅವರನ್ನು
ಸಂತೈಸುವೆನು. ನಾನು ಎಂದಿಗೂ ಅವರನ್ನು ತೊರೆಯ
ಲಿಲ್ಲವೆಂಬಂತೆ ಇರುವದು. ನಾನು ಅವರ ದೇವರಾದ
ಯೆಹೋವನು. ನಾನೇ ಅವರಿಗೆ ಸಹಾಯಮಾಡುವೆನು.
7ಕುಡಿದು ಮತ್ತರಾದ ಸೈನಿಕರು ಸಂತೋಷಪಡುವಂತೆ
ಎಫ್ರಾಯೀಮ್ಯರು ಸಂತಸದಿಂದಿರುವರು. ಮಕ್ಕಳೂ
ಆನಂದದಿಂದ ನಲಿದಾಡುವರು. ಅವರೆಲ್ಲರೂ
ಯೆಹೋವನ ಜೊತೆಯಲ್ಲಿ ಸಂತೋಷದಿಂದಿರುವರು.

8‘‘ನಾನು ಶೀಟಿ ಹೊಡೆದು ಎಲ್ಲರನ್ನು ಒಟ್ಟುಸೇರಿಸು
ವೆನು. ನಾನು ನಿಜವಾಗಿಯೂ ಅವರನ್ನು ರಕ್ಷಿಸುವೆನು.
ಜನರು ಕಿಕ್ಕಿರಿದು ತುಂಬಿಹೋಗುವರು. 9ಹೌದು, ನಾನು
ನನ್ನ ಜನರನ್ನು ಎಲ್ಲಾ ರಾಜ್ಯಗಳಿಗೆ ಚದರಿಸಿ ಬಿಟ್ಟಿರು
ತ್ತೇನೆ. ಆದರೆ ಆ ಬಹುದೂರದ ರಾಜ್ಯಗಳಲ್ಲಿ ಅವರು
ನನ್ನನ್ನು ನೆನಪು ಮಾಡುವರು. ಅವರೂ ಅವರ ಮಕ್ಕಳೂ
ಉಳಿಯುವರು ಮತ್ತು ಅವರು ಹಿಂತಿರುಗಿ ಬರುವರು.
10ನಾನು ಅವರನ್ನು ಈಜಿಪ್ಟ್‌ನಿಂದ ಮತ್ತು ಅಶ್ಶೂರದಿಂದ
ಹಿಂದಕ್ಕೆ ತರುವೆನು. ಅವರನ್ನು ಗಿಲ್ಯಾದಿಗೆ ಕರೆದು
ಕೊಂಡು ಬರುವೆನು. ಅಲ್ಲಿ ಅವರಿಗೆ ಸ್ಥಳ ಸಾಲದು.
ಆದುದರಿಂದ ಪಕ್ಕದ ಲೆಬನೋನ್ ಪ್ರಾಂತ್ಯದಲ್ಲಿ
ವಾಸಿಸುವಂತೆ ಮಾಡುವೆನು.’’ 11ಇದು ಹಿಂದಿನ ಕಾಲ
ದಲ್ಲಿ ದೇವರು ಅವರನ್ನು ಈಜಿಪ್ಟಿನಿಂದ ಬಿಡಿಸಿ ತಂದಂತೆ
ಇರುವದು. ಆತನು ಸಮುದ್ರದ ತೆರೆಗಳನ್ನು ಬಡಿದು ಅದು
ಇಬ್ಭಾಗವಾಗುವಂತೆ ಮಾಡಿದನು. ಜನರು ಸಂಕಟದ
ಸಮುದ್ರದ ಮಧ್ಯದಲ್ಲಿ ದಾಟಿಹೋದರು. ಯೆಹೋ
ವನು ಹೊಳೆಗಳನ್ನು ಬತ್ತಿಸಿಬಿಡುವನು. ಆತನು ಅಶ್ಶೂ
ರ್ಯದ ಜಂಭವನ್ನೂ ಈಜಿಪ್ಟಿನ ಬಲವನ್ನೂ ಮುರಿಯು
ವನು. 12ಯೆಹೋವನು ತನ್ನ ಜನರನ್ನು ಶಕ್ತಿಶಾಲಿಗಳ
ನ್ನಾಗಿ ಮಾಡುವನು. ಅವರು ಆತನ ನಾಮದ ಘನತೆ
ಗೋಸ್ಕರ ಜೀವಿಸುವರು. ಇದು ಯೆಹೋವನ ನುಡಿ.

## ದೇವರು ಅನ್ಯ ದೇಶಗಳವರನ್ನು ಶಿಕ್ಷಿಸುವನು

11 ಲೆಬನೋನೇ, ನೀನು ನಿನ್ನ ದ್ವಾರಗಳನ್ನು ತೆರೆ.
ಆಗ ಬೆಂಕಿಯು ಒಳಬಂದು ನಿನ್ನ ದೇವದಾರು
ಮರಗಳನ್ನೆಲ್ಲಾ ಸುಟ್ಟು ಹಾಕುವದು. 2ದೇವದಾರು
ಮರಗಳು ಬೀಳುವಾಗ ಓಕ್ ಮರಗಳು ರೋಧಿಸುವವು.
ಆ ಬಲವಾದ ಮರಗಳನ್ನು ತೆಗೆದುಕೊಂಡು ಹೋಗ
ಲಾಗುವುದು. ಅಡವಿಯು ಕಡಿದು ಹಾಕಲ್ಪಟ್ಟದ್ದಕ್ಕಾಗಿ
ಬಾಷಾನಿನ ಶ್ರೇಷ್ಠ ವೃಕ್ಷಗಳು ದುಃಖಿಸುವವು. 3ರೋಧಿ
ಸುವ ಕುರುಬರ ಕಡೆಗೆ ಕಿವಿಗೊಡಿರಿ. ಅವರ ನಾಯಕರು
ಗಳನ್ನು ತೆಗೆದುಕೊಂಡು ಹೋಗಿರುತ್ತಾರೆ. ಪ್ರಾಯದ
ಸಿಂಹಗಳ ಗರ್ಜನೆಗೆ ಕಿವಿಗೊಡಿರಿ. ಯೋರ್ದನ್
ಹೊಳೆಯ ಬದಿಯಲ್ಲಿದ್ದ ದಟ್ಟವಾದ ಪೊದರುಗಳೆಲ್ಲಾ
ತೆಗೆದುಕೊಂಡು ಹೋಗಲಾಗಿದೆ.

4ನನ್ನ ದೇವರಾದ ಯೆಹೋವನು ಹೇಳುವದೇ
ನೆಂದರೆ, ‘‘ಕೊಲ್ಲುವದಕ್ಕೋಸ್ಕರವಾಗಿ ಬೆಳೆಸಿದ ಕುರಿ
ಗಳನ್ನು ಪರಾಮರಿಸು. 5ಅವರ ನಾಯಕರುಗಳು ವರ್ತಕ
ರಂತೆಯೂ ಧಣಿಗಳಂತೆಯೂ ಇರುವರು. ಧಣಿಗಳು
ಕುರಿಗಳನ್ನು ಕೊಂದರೂ ಶಿಕ್ಷಿಸಲ್ಪಡುವದಿಲ್ಲ. ವರ್ತಕರು
ಕುರಿಗಳನ್ನು ಮಾರಿ, ‘ಓ, ನಾನೀಗ ಧನಿಕನಾಗಿದ್ದೇನೆ.
ಯೆಹೋವನಿಗೆ ಸ್ತೋತ್ರವಾಗಲಿ’ ಎಂದು ಅನ್ನುವರು.
ಕುರುಬರು ತಮ್ಮ ಕುರಿಗಳಿಗಾಗಿ ಚಿಂತಿಸುವದಿಲ್ಲ. 6ಈ
ದೇಶದಲ್ಲಿ ವಾಸಿಸುವ ಜನರ ಬಗ್ಗೆ ನಾನು ದುಃಖಿಸುವು
ದಿಲ್ಲ.’’ ಇದು ಯೆಹೋವನ ನುಡಿ. ‘‘ನೋಡಿರಿ, ಪ್ರತಿ
ಯೊಬ್ಬನೂ ತನ್ನ ಅರಸನಿಂದಲೂ ನೆರೆಯವರಿಂದಲೂ
ಹಾಳು ಮಾಡಲ್ಪಡುವಂತೆ ನಾನು ಮಾಡುವೆನು. ಅವರ
ದೇಶವನ್ನು ಹಾಳುಮಾಡುವಂತೆ ಅವರನ್ನು ಬಿಡುವೆನು.
ಅವರನ್ನು ನಿಲ್ಲಿಸುವದಿಲ್ಲ.’’

7ಕೊಲ್ಲುವದಕ್ಕಾಗಿ ಬೆಳೆಸುವ ಕುರಿಗಳನ್ನು ನಾನು
ಪರಾಮರಿಸಿದೆನು. ನನಗೆ ಎರಡು ಕೋಲುಗಳು ದೊರೆ
ತವು. ಒಂದು ಕೋಲನ್ನು ದಯೆ ಎಂದೂ ಇನ್ನೊಂದನ್ನು
ಒಗ್ಗಟ್ಟು ಎಂಬ ಹೆಸರಿನಿಂದಲೂ ಕರೆದೆನು. ಆ ಬಳಿಕ
ಕುರಿಗಳನ್ನು ಪರಾಮರಿಸತೊಡಗಿದೆನು. 8ಒಂದೇ ತಿಂಗ
ಳೊಳಗೆ ಮೂರು ಮಂದಿ ಕುರುಬರನ್ನು ನಾನು ಕೆಲಸ
ದಿಂದ ಬಿಡಿಸಿದೆನು. ನಾನು ಕುರಿಗಳ ಮೇಲೆ ಸಿಟ್ಟುಗೊಳ್ಳ
ಲಾರಂಭಿಸಿದೆನು. ಅವು ನನ್ನನ್ನು ಹಗೆ ಮಾಡಲಾ
ರಂಭಿಸಿದವು.

9ಆಗ ನಾನು, ‘‘ಸರಿ, ನಾನು ನಿಮ್ಮನ್ನು ಇನ್ನು
ನೋಡಿಕೊಳ್ಳುವದಿಲ್ಲ. ಹೋಗಿ ಬಿಡುತ್ತೇನೆ’’ ಅಂದೆನು.
ಸಾಯಲು ಮನಸ್ಸುಳ್ಳವುಗಳನ್ನು ಸಾಯಲುಬಿಟ್ಟೆನು.

ನಾಶವಾಗಲು ಮನಸ್ಸುಳ್ಳವುಗಳನ್ನು ನಾಶವಾಗಲು
ಬಿಟ್ಟೆನು. ಅಳಿಯದೆ ಉಳಿದವುಗಳು ಪರಸ್ಪರ ನಾಶಮಾಡಿ
ಕೊಳ್ಳುವರು. 10ಆಗ ನಾನು ಕರುಣೆ ಹೆಸರಿನ ಕೋಲನ್ನು
ತೆಗೆದುಕೊಂಡು ತುಂಡುಮಾಡಿದೆನು. ಯೆಹೋವನು
ಎಲ್ಲಾ ಜನರೊಂದಿಗೆ ಮಾಡಿದ ಒಡಂಬಡಿಕೆಯು
ಮುರಿಯಿತು ಎಂಬುದಾಗಿ ಅವರಿಗೆ ತೋರಿಸಿದೆನು.
11ಹೀಗೆ ಆ ದಿವಸ ಒಡಂಬಡಿಕೆಗೆ ಅಂತ್ಯವಾಯಿತು.
ನನ್ನನ್ನೇ ನೋಡುತ್ತಿದ್ದ ಆ ಬಡ ಕುರಿಗಳಿಗೆ ಈ ಸಂದೇಶವು
ಯೆಹೋವನಿಂದಲೇ ನನಗೆ ಬಂದಿದೆ ಎಂಬುದು
ತಿಳಿದಿತ್ತು.

12ಆಗ ನಾನು ಹೀಗೆಂದೆನು, ''ನನಗೆ ಸಂಬಳ ಕೊಡಲು
ನಿಮಗೆ ಇಷ್ಟವಿದ್ದರೆ ಕೊಡಿರಿ. ಇಲ್ಲದಿದ್ದಲ್ಲಿ ಬೇಡ.'' ಆಗ
ಅವರು ನನಗೆ ಮೂವತ್ತು ಬೆಳ್ಳಿ ನಾಣ್ಯಗಳನ್ನು ಕೊಟ್ಟರು.
13ಆಗ ಯೆಹೋವನು ನನಗೆ ಹೇಳಿದ್ದೇನೆಂದರೆ, ''ನನ್ನ
ಬೆಲೆ ಅಷ್ಟೇ ಎಂದು ಅವರು ನೆನಸುತ್ತಾರೆ. ಆ ಹಣವನ್ನು
ತೆಗೆದು ಆಲಯದ ಖಜಾನೆಗೆ ಸುರಿ.'' ನಾನು ಆ
ಮೂವತ್ತು ಬೆಳ್ಳಿ ನಾಣ್ಯವನ್ನು ತೆಗೆದುಕೊಂಡು ಆಲಯದ
ಖಜಾನೆಗೆ ಸುರಿದೆನು. 14ಆಮೇಲೆ ನಾನು 'ಒಗ್ಗಟ್ಟು'
ಎಂಬ ಹೆಸರಿನ ಕೋಲನ್ನು ಎರಡು ತುಂಡಾಗಿ ಮುರಿ
ದೆನು. ಇಸ್ರೇಲ್ ಮತ್ತು ಯೆಹೂದ ರಾಜ್ಯಗಳ ಒಗ್ಗಟ್ಟು
ಮುರಿಯಿತು ಎಂದು ತೋರಿಸುವದಕ್ಕಾಗಿ ನಾನು ಹಾಗೆ
ಮಾಡಿದೆನು.

15ಆಗ ಯೆಹೋವನು ನನಗೆ ಹೇಳಿದ್ದೇನೆಂದರೆ, ''ಒಬ್ಬ
ಮೂರ್ಖ ಕುರುಬನು ಉಪಯೋಗಿಸುವ ವಸ್ತುಗಳನ್ನು
ತೆಗೆದುಕೊಂಡು ಬಾ.

16ನಾನು ಈ ದೇಶಕ್ಕೆ ಒಬ್ಬ ಹೊಸ ಕುರುಬನನ್ನು
ನೇಮಕ ಮಾಡುವೆನೆಂದು ಆ ರೀತಿಯಾಗಿ ತೋರಿಸು
ವೆನು. ಆದರೆ ಈ ಮನುಷ್ಯನಿಗೆ ನಾಶವಾಗುತ್ತಿರುವ
ಕುರಿಗಳನ್ನು ಪರಾಮರಿಸಲು ಸಾಧ್ಯವಾಗುವುದಿಲ್ಲ.
ಗಾಯಗೊಂಡ ಕುರಿಗಳನ್ನು ಗುಣಮಾಡಲು ಅವನಿಂದ
ಸಾಧ್ಯವಾಗುವುದಿಲ್ಲ. ಸಾಯದೆ ಉಳಿದ ಕುರಿಗಳಿಗೆ
ಆಹಾರ ಕೊಡಲು ಅವನಿಂದ ಸಾಧ್ಯವಾಗುವುದಿಲ್ಲ. ಪುಷ್ಟಿ
ಕರವಾದ ಕುರಿಗಳನ್ನು ಪೂರ್ತಿಯಾಗಿ ತಿಂದು
ಬಿಡಲ್ಪಡುವದು. ಅದರ ಗೊರಸುಗಳು ಮಾತ್ರವೇ
ಉಳಿಯುವದು.''

17 ಓ, ನನ್ನ ಕೆಲಸಕ್ಕೆ ಬಾರದ ಕುರುಬನೇ, ನೀನು ನನ್ನ
ಕುರಿಗಳನ್ನು ತೊರೆದುಬಿಟ್ಟೇ. ಅವನನ್ನು ಶಿಕ್ಷಿಸಿರಿ!
ಖಡ್ಗದಿಂದ ಅವನ ಬಲಗೈಯನ್ನು ಕತ್ತರಿಸಿ ಹಾಕಿರಿ.
ಮತ್ತು ಬಲಗಣ್ಣನ್ನು ಕಿತ್ತಿ ಹಾಕಿರಿ. ಆಗ ಅವನ
ಬಲಗೈ ಅಪ್ರಯೋಜಕವಾಗುವದು. ಬಲಗಣ್ಣು
ದೃಷ್ಟಿಹೀನವಾಗುವದು.

## ಯೆಹೂದದ ಸುತ್ತಲಿರುವ ದೇಶಗಳ ಬಗ್ಗೆ ದರ್ಶನ

12 ಇಸ್ರೇಲಿನ ಬಗ್ಗೆ ಯೆಹೋವನ ದುಃಖದ
ಸಂದೇಶ. ಯೆಹೋವನು ಆಕಾಶವನ್ನೂ ಭೂಮಿ
ಯನ್ನೂ ನಿರ್ಮಿಸಿರುತ್ತಾನೆ. ಮಾನವನಲ್ಲಿ ತನ್ನ ಆತ್ಮವ
ನ್ನಿಟ್ಟನು. ಆ ಬಳಿಕ ಆತನು ಹೇಳಿದ್ದೇನೆಂದರೆ, 2''ನಾನು
ಜೆರುಸಲೇಮಿನ ಸುತ್ತುಮುತ್ತು ಇರುವ ರಾಷ್ಟ್ರಗಳಿಗೆ ಆಕೆ
ಯನ್ನು ಒಂದು ವಿಷದ ಲೋಟವನ್ನಾಗಿ ಮಾಡುತ್ತೇನೆ.
ಆ ರಾಜ್ಯಗಳು ಆ ಪಟ್ಟಣದ ಮೇಲೆ ಬೀಳುವವು. ಆಗ
ಇಡೀ ಯೆಹೂದವು ಉರುಲಿನೊಳಗೆ ಬೀಳುವದು.
3ಆದರೆ ನಾನು ಜೆರುಸಲೇಮನ್ನು ಒಂದು ಭಾರವಾದ
ಬಂಡೆ ಕಲ್ಲಿನಂತೆ ಮಾಡುವೆನು. ಅದನ್ನು ತೆಗೆಯಲು
ಯತ್ನಿಸುವವನು ಗಾಯಗೊಳ್ಳುವನು. ಆದರೂ ಲೋಕದ
ಎಲ್ಲಾ ದೇಶಗಳವರು ಜೆರುಸಲೇಮಿಗೆ ವಿರುದ್ಧವಾಗಿ
ಯುದ್ಧಕ್ಕೆ ಬರುವರು. 4ಆದರೆ ಆ ಸಮಯದಲ್ಲಿ ನಾನು
ಅವರ ಕುದುರೆಗಳನ್ನು ಬೆಚ್ಚಿ ಬೀಳುವಂತೆ ಮಾಡುವೆನು.
ಅದರ ಸವಾರನು ಭಯಗೊಳ್ಳುವನು. ಶತ್ರುವಿನ ಎಲ್ಲಾ
ಕುದುರೆ ಗಳನ್ನು ನಾನು ಕುರುಡು ಮಾಡುವೆನು. ಆದರೆ
ನಾನು ಕಣ್ಣು ತೆರೆದು ಯೆಹೂದ ವಂಶವನ್ನು
ಸಂರಕ್ಷಿಸುವೆನು.

5ಯೆಹೂದದ ಪ್ರಧಾನರು ತಮ್ಮ ಜನರನ್ನು ಹುರಿದುಂ
ಬಿಸುವರು. 'ಸೇನಾಧೀಶ್ವರನಾದ ಯೆಹೋವನು ನಿಮ್ಮ
ದೇವರು. ಆತನೇ ನಮಗೆ ಬಲವನ್ನು ಕೊಡುವಾತನು'
ಎಂದು ಹೇಳುವರು. 6ಆ ಸಮಯದಲ್ಲಿ ಯೆಹೂದದ
ಕುಲ ಪ್ರಧಾನರನ್ನು ನಾನು ಕಾಡಿನಲ್ಲಿ ಉರಿಯುವ ಬೆಂಕಿ
ಯಂತೆ ಮಾಡುವೆನು. ಅವರು ಹುಲ್ಲು ಸುಡುವ ಬೆಂಕಿ
ಯೋಪಾದಿಯಲ್ಲಿ ತಮ್ಮ ವೈರಿಗಳನ್ನು ನಾಶಮಾಡುವರು.
ತಮ್ಮ ಸುತ್ತಮುತ್ತಲಿರುವ ವೈರಿಗಳನ್ನು ನಾಶಮಾಡುವರು.
ಜೆರುಸಲೇಮಿನ ಜನರು ತಿರುಗಿ ಆರಾಮವಾಗಿ
ವಾಸಿಸುವರು.''

7ಯೆಹೋವನು ಯೆಹೂದದ ಜನರನ್ನು ಮೊದಲು
ರಕ್ಷಿಸುವನು. ಆಗ ಜೆರುಸಲೇಮಿನ ನಿವಾಸಿಗಳು ತಮ್ಮನ್ನು
ಹೆಚ್ಚಿಸಿಕೊಳ್ಳುವದಿಲ್ಲ. ಜೆರುಸಲೇಮಿನಲ್ಲಿ ವಾಸಿಸುವ
ದಾವೀದನ ಸಂತತಿಯವರೂ ಇತರರೂ ತಾವು ಯೆಹೂದ
ಪ್ರಾಂತ್ಯದಲ್ಲಿ ವಾಸಿಸುವ ಜನರಿಗಿಂತ ಉತ್ತಮರು ಎಂದು
ಹೆಚ್ಚಳ ಪಡುವದಿಲ್ಲ. 8ಜೆರುಸಲೇಮಿನಲ್ಲಿ ವಾಸಿಸುವ
ಜನರನ್ನು ಯೆಹೋವನು ಕಾಪಾಡುತ್ತಾನೆ. ಒಬ್ಬ ಬಲ
ಹೀನ ಮನುಷ್ಯನೂ ದಾವೀದನಂತೆ ಶೂರನಾಗುವನು.
ಮತ್ತು ದಾವೀದನ ಸಂತತಿಯ ಜನರು ದೇವರುಗ
ಳಂತಿದ್ದು ದೇವರ ಸ್ವಂತ ದೂತರಂತೆ ತಮ್ಮ ಜನರನ್ನು
ನಡಿಸುವರು.

9ಯೆಹೋವನು ಹೇಳುವದೇನೆಂದರೆ, ''ಆ ಸಮಯ
ದಲ್ಲಿ ಜೆರುಸಲೇಮಿಗೆ ವಿರುದ್ಧವಾಗಿ ಯುದ್ಧಕ್ಕೆ ಬರುವ

ಜನಾಂಗಗಳನ್ನು ನಾನು ನಾಶಮಾಡುವೆನು. 10ನಾನು
ದಾವೀದನ ಸಂತತಿಯವರಿಗೂ ಜೆರುಸಲೇಮಿನಲ್ಲಿ ವಾಸಿ
ಸುವವರಿಗೂ ದಯೆ ಕರುಣೆಗಳ ಆತ್ಮದಿಂದ ತುಂಬಿಸು
ವೆನು. ಅವರು ತಾವು ಈಟಿಯಿಂದ ತಿವಿದ ನನ್ನನ್ನು ದೃಷ್ಟಿಸಿ
ನೋಡುವರು; ತುಂಬಾ ದುಃಖಿಸುವರು. ತಮಗಿದ್ದ
ಒಬ್ಬನೇ ಮಗನನ್ನು ಕಳಕೊಂಡವರಂತೆ ರೋಧಿಸುವರು.
11ಜೆರುಸಲೇಮಿನಲ್ಲಿ ಗೋಳಾಟವೂ, ದುಃಖವೂ
ತುಂಬುವ ಕಾಲವು ಬರುವದು. ಅದು ಮೆಗಿದ್ದೋ ತಗ್ಗಿ
ನಲ್ಲಿ ಹದದ್ ರಿಮ್ಮೋನನು ಸತ್ತಾಗ ಜನರು ಗೋಳಾಡಿದ
ಸಮಯದಂತೆ ಇರುವದು. 12ಪ್ರತಿಯೊಂದು
ಕುಟುಂಬವೂ ರೋಧಿಸುವದು. ದಾವೀದನ ಕುಲದ
ವರೂ ಗೋಳಾಡುವರು. ಅವರ ಹೆಂಡತಿಯರೂ
ಗೋಳಾಡುವರು. ನಾತಾನಿನ ಕುಟುಂಬದವರೂ
ಗೋಳಾಡುವರು; ಅವರ ಹೆಂಡತಿಯರೂ ಗೋಳಾಡು
ವರು. 13ಲೇವಿಯ ಸಂತಾನದ ಜನರೂ ಗೋಳಾಡು
ವರು; ಅವರ ಹೆಂಡತಿಯರೂ ಗೋಳಾಡುವರು.
ಶಿಮ್ಮಿಯ ಸಂತಾನದವರೂ ಗೋಳಾಡುವರು; ಅವರ
ಹೆಂಡತಿಯರೂ ಗೋಳಾಡುವರು. 14ಅದೇ ರೀತಿಯಲ್ಲಿ
ಇತರ ಎಲ್ಲಾ ಕುಲದವರೂ ದುಃಖಿಸುವರು. ಗಂಡಸರೂ
ಹೆಂಗಸರೂ ಗೋಳಾಡುವರು.''

13 ಆದರೆ ಆ ಸಮಯದಲ್ಲಿ ಜೆರುಸಲೇಮಿನಲ್ಲಿ
ವಾಸಿಸುವ ಜನರಿಗೂ ದಾವೀದನ ಕುಟುಂಬದ
ವರಿಗೂ ಒಂದು ಹೊಸಬುಗ್ಗೆಯ ನೀರು ಚಿಮ್ಮುವದು.
ಆ ಬುಗ್ಗೆಯು ಜನರ ಪಾಪಗಳನ್ನು ತೊಳೆದು ಶುದ್ಧ
ಮಾಡುವದಕ್ಕಾಗಿ ಇರುವದು.

## ಇನ್ನು ಮುಂದೆ ಸುಳ್ಳು ಪ್ರವಾದಿಗಳಿರುವದಿಲ್ಲ

2ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
''ಆ ಸಮಯದಲ್ಲಿ ಈ ಪ್ರಪಂಚದಲ್ಲಿರುವ ವಿಗ್ರಹ
ಗಳನ್ನೆಲ್ಲಾ ನಾನು ತೆಗೆದುಬಿಡುವೆನು. ಜನರು ಅವುಗಳ
ಹೆಸರನ್ನು ತಮ್ಮ ನೆನಪಿಗೆ ತಾರರು. ಸುಳ್ಳು ಪ್ರವಾದಿ
ಗಳನ್ನೂ ಅಶುದ್ಧ ಆತ್ಮಗಳನ್ನೂ ನಾನು ಭೂಮಿಯ
ಮೇಲಿಂದ ತೆಗೆದುಬಿಡುವೆನು. 3ಯಾವನಾದರೂ
ಪ್ರವಾದಿಸುವದನ್ನು ಮುಂದುವರಿಸಿದರೆ ಅವನು ಶಿಕ್ಷೆಗೆ
ಗುರಿಯಾಗುವನು. 'ನೀನು ಯೆಹೋವನ ಹೆಸರಿನಲ್ಲಿ
ಸುಳ್ಳನ್ನು ಹೇಳಿದ್ದೀ. ಆದುದರಿಂದ ನೀನು ಸಾಯಲೇ
ಬೇಕು' ಎಂದು ಅವನ ಸ್ವಂತ ತಂದೆ ತಾಯಿಗಳು ಅವನಿಗೆ
ಹೇಳುವರು. ಅವನ ಸ್ವಂತ ತಂದೆ ತಾಯಿಗಳು ಅವನು
ಸುಳ್ಳು ಪ್ರವಾದನೆ ಹೇಳಿದ್ದಕ್ಕೆ ಅವನನ್ನು ಖಡ್ಗದಿಂದ
ಕೊಲ್ಲಿಸುವರು. 4ಆ ಸಮಯದಲ್ಲಿ ಪ್ರವಾದಿಗಳು ತಮ್ಮ
ದರ್ಶನ, ಪ್ರವಾದನೆಗಳಿಗಾಗಿ ನಾಚಿಕೊಳ್ಳುವರು. ತಾವು
ಪ್ರವಾದಿಗಳೆಂದು ತೋರಿಸಿಕೊಳ್ಳಲು ಧರಿಸುವ ಗಡು
ಸಾದ ಬಟ್ಟೆಗಳನ್ನು ಧರಿಸಿಕೊಳ್ಳುವದಿಲ್ಲ. ಅವರು ಪ್ರವಾದ
ನೆಗಳೆಂದು ಹೇಳುವ ತಮ್ಮ ಸುಳ್ಳುಗಳಿಂದ ಜನರನ್ನು
ಮೋಸಪಡಿಸುವದಿಲ್ಲ. 5ಅವರು, 'ನಾನು ಪ್ರವಾದಿ ಯಲ್ಲ,
ನಾನೊಬ್ಬ ರೈತ. ನಾನು ಬಾಲ್ಯಪ್ರಾಯದಿಂದಲೇ
ರೈತನಾಗಿದ್ದೇನೆ' ಎಂದು ಹೇಳುವರು. 6ಆದರೆ ಬೇರೆ
ಜನರು, 'ಹಾಗಾದರೆ ನಿನ್ನ ಕೈಯಲ್ಲಿ ಗಾಯಗಳೇನು?'
ಎಂದು ಕೇಳಿದಾಗ ಅವನು, 'ನನ್ನ ಸ್ನೇಹಿತರ ಮನೆಯಲ್ಲಿ
ನನಗೆ ಏಟು ಬಿತ್ತು' ಎಂದು ಅನ್ನುವನು.'' 7ಸರ್ವಶಕ್ತ
ನಾದ ಯೆಹೋವನು ಹೇಳುವದೇನೆಂದರೆ: ''ಖಡ್ಗವೇ,
ಕುರುಬನನ್ನು ಹೊಡೆ, ನನ್ನ ಸ್ನೇಹಿತನಿಗೆ ಹೊಡೆ. ಕುರುಬ
ನನ್ನು ಹೊಡೆ. ಆಗ ಕುರಿಗಳು ಚದರಿಹೋಗುವವು. ಮತ್ತು
ನಾನು ಆ ಚಿಕ್ಕವುಗಳನ್ನು ಶಿಕ್ಷಿಸುವೆನು. 8ದೇಶದ
ಮೂರನೇ ಎರಡು ಪಾಲಷ್ಟು ಜನರು ಗಾಯಗೊಂಡು
ಸಾಯುವರು. ಒಂದು ಪಾಲಷ್ಟು ಜನರು ಬದುಕಿ
ಉಳಿಯುವರು. 9ಆ ಬಳಿಕ ನಾನು ಉಳಿದವರನ್ನು
ಪರೀಕ್ಷಿಸುವೆನು. ಅವರಿಗೆ ಅನೇಕ ಸಂಕಟ ಬರ
ಮಾಡುವೆನು. ಅದು ಬೆಳ್ಳಿಯನ್ನು ಬೆಂಕಿಯಲ್ಲಿ ಪರೀಕ್ಷಿಸಿ
ದಂತಿರುವುದು. ಒಬ್ಬನು ಬಂಗಾರವನ್ನು ಪರೀಕ್ಷಿಸುವಂತೆ
ನಾನು ಅವರನ್ನು ಪರೀಕ್ಷಿಸುವೆನು. ಆಗ ಅವರು ಸಹಾಯ
ಮಾಡುವಂತೆ ನನಗೆ ಮೊರೆಯಿಡುವರು ಮತ್ತು ನಾನು
ಅವರಿಗೆ ಉತ್ತರಕೊಡುವೆನು. ಆಗ ನಾನು, 'ನೀವು ನನ್ನ
ಜನರು' ಎಂದು ಹೇಳುವೆನು. ಅದಕ್ಕವರು,
'ಯೆಹೋವನು ನಮ್ಮ ದೇವರು' ಎಂದು ಹೇಳುವರು.''

## ನ್ಯಾಯತೀರ್ಪಿನ ದಿನ

14 ಯೆಹೋವನ ನ್ಯಾಯತೀರಿಸುವ ದಿನ ಬಂದಿದೆ.
ನೀವು ಸುಲಿದುಕೊಂಡ ಐಶ್ವರ್ಯವು ನಿಮ್ಮ
ಪಟ್ಟಣದಲ್ಲಿ ಪಾಲು ಮಾಡಲಾಗುವದು. 2ಜೆರುಸಲೇ
ಮಿಗೆ ವಿರುದ್ಧವಾಗಿ ಯುದ್ಧಮಾಡಲು ನಾನು ಎಲ್ಲಾ
ಜನಾಂಗಗಳನ್ನು ಒಟ್ಟಿಗೆ ಸೇರಿಸುವೆನು. ಅವರು ಪಟ್ಟಣ
ವನ್ನು ವಶಪಡಿಸಿಕೊಂಡು ಕಟ್ಟಡಗಳನ್ನೆಲ್ಲಾ ಧ್ವಂಸ
ಮಾಡುವರು. ಹೆಂಗಸರನ್ನು ಬಲಾತ್ಕಾರದಿಂದ ಸಂಭೋ
ಗಿಸುವರು. ಜನಸಂಖ್ಯೆಯ ಅರ್ಧದಷ್ಟು ಜನರು ಸೆರೆಹಿಡಿ
ಯಲ್ಪಡುವರು. ಉಳಿದವರನ್ನು ಪಟ್ಟಣದಿಂದ ಕೊಂಡೊ
ಯ್ಯುವುದಿಲ್ಲ. 3ಆಗ ಯೆಹೋವನು ಆ ಜನಾಂಗಗಳ
ವಿರುದ್ಧವಾಗಿ ಯುದ್ಧಮಾಡುವನು. ಅದು ಭಯಂಕರ
ವಾದ ಕಾದಾಟವಾಗಿರುವದು. 4ಅದೇ ಸಮಯದಲ್ಲಿ
ಜೆರುಸಲೇಮಿಗೆ ಪೂರ್ವದಲ್ಲಿರುವ ಆಲೀವ ಮರಗಳ
ಬೆಟ್ಟದ ಮೇಲೆ ನಿಂತುಕೊಳ್ಳುವನು. ಆ ಬೆಟ್ಟವು ಇಬ್ಭಾಗ
ವಾಗುವದು. ಅದರ ಒಂದು ಭಾಗವು ಉತ್ತರಕ್ಕೆ ಹೋಗು
ವದು, ಇನ್ನೊಂದು ಭಾಗವು ದಕ್ಷಿಣದ ಕಡೆಗೆ ಹೋಗು
ವದು. 5ಆ ಬೆಟ್ಟವು ನಿನ್ನ ಹತ್ತಿರಕ್ಕೆ ಬರುತ್ತಿರುವಾಗ ನೀನು

ಓಡಿಹೋಗಲು ಪ್ರಯತ್ನಿಸುವಿ. ಯೆಹೂದದ ಅರಸನಾದ ಉಜ್ಜೀಯನ ಕಾಲದಲ್ಲಿ ಆದ ಭೂಕಂಪದ ಸಮಯದಲ್ಲಿ ನೀನು ಹೇಗೆ ಪಲಾಯನ ಮಾಡಿದ್ದಿಯೋ ಅದೇ ರೀತಿ ಯಲ್ಲಿ ನೀನು ಓಡುವಿ. ಆಗ ನನ್ನ ದೇವರಾದ ಯೆಹೋವನು ತನ್ನ ಎಲ್ಲಾ ಪರಿಶುದ್ಧ ಜನರೊಂದಿಗೆ ಬರುವನು.

6-7ಅದು ಒಂದು ಮಹಾ ವಿಶೇಷ ದಿವಸವಾಗಿರುವದು.
ಆ ದಿವಸದಲ್ಲಿ ಬೆಳಕಾಗಲೀ, ಚಳಿಯಾಗಲೀ, ಹಿಮ
ವಾಗಲೀ ಇರುವದಿಲ್ಲ. ಇದು ಹೇಗೆ ಎಂದು ಯೆಹೋವ
ನಿಗೆ ಮಾತ್ರ ಗೊತ್ತು. ರಾತ್ರಿ ಬರಬೇಕಾದ ವೇಳೆಯಲ್ಲಿ
ಹಗಲು ಇನ್ನೂ ಇರುವದು. 8‘‘ಆ ಸಮಯದಲ್ಲಿ ಜೆರುಸ
ಲೇಮಿನಿಂದ ನೀರು ಹರಿಯುತ್ತಲೇ ಇರುವದು. ಆ
ನದಿಯು ಇಬ್ಭಾಗವಾಗಿ ಒಂದು ಭಾಗ ಪೂರ್ವಕ್ಕೆ
ಹರಿಯುವದು. ಇನ್ನೊಂದು ಭಾಗ ಪಶ್ಚಿಮಕ್ಕೆ ಹರಿದು
ಮೆಡಿಟರೇನಿಯನ್ ಸಮುದ್ರವನ್ನು ಸೇರುವದು. ಈ
ನದಿಯು ಎಲ್ಲಾ ಕಾಲದಲ್ಲಿಯೂ ಬೇಸಿಗೆ, ಹಿಮಕಾಲ
ವೆನ್ನದೆ ಹರಿಯುತ್ತಲೇ ಇರುವದು. 9ಆ ಸಮಯದಲ್ಲಿ
ಯೆಹೋವನು ಇಡೀ ಭೂಲೋಕದ ಅರಸನಾಗುವನು.
ಆತನು ಒಬ್ಬನೇ. ಆತನ ಹೆಸರು ಒಂದೇ. 10ಆ
ಸಮಯದಲ್ಲಿ ಜೆರುಸಲೇಮಿನ ಸುತ್ತಮುತ್ತ ಇರುವ
ಜಾಗವು ನಿರ್ಜನವಾಗಿದ್ದು ಅರಾಬಾ ಮರುಭೂಮಿ
ಯಿಂತಿರುವದು. ದೇಶವು ಗೆಬದಿಂದ ಹಿಡಿದು ನೆಗೆವ್
ನಲ್ಲಿರುವ ರಿಮ್ಮೋನ್ ತನಕ ಮರುಭೂಮಿಯಂತಿರು
ವದು. ಆದರೆ ಜೆರುಸಲೇಮ್ ನಗರವು ತಿರುಗಿ ಕಟ್ಟ
ಲ್ಪಡುವದು. ಬೆನ್ಯಾಮೀನ್ ದ್ವಾರದಿಂದ ಮೂಲೇ ದ್ವಾರ
ಅಥವಾ ಮೊದಲನೇ ದ್ವಾರದ ತನಕ ಮತ್ತು ಹನನೇಲ್
ಬುರುಜಿನಿಂದ ಹಿಡಿದು ಅರಸನ ದ್ರಾಕ್ಷಾತೋಟ್ಟೆಯ ತನಕ
ಹೊಸದಾಗಿ ಕಟ್ಟಲ್ಪಡುವದು. 11ಜನರು ಅಲ್ಲಿಗೆ ವಾಸಿ
ಸಲು ಹೋಗುವರು. ಇನ್ನು ಮುಂದೆ ಯಾವ ಶತ್ರುವೂ
ಅವರನ್ನು ನಾಶಮಾಡಲು ಬಾರನು. ಜೆರುಸಲೇಮ್
ಸುರಕ್ಷಿತವಾಗಿರುವದು. 12ಆದರೆ ಜೆರುಸಲೇಮಿಗೆ
ವಿರುದ್ಧವಾಗಿ ಯುದ್ಧ ಮಾಡಿದ ಜನಾಂಗಗಳನ್ನೆಲ್ಲಾ
ಯೆಹೋವನು ಶಿಕ್ಷಿಸುವನು. ಅವರಿಗೆ ಭಯಂಕರ
ರೋಗವನ್ನು ಬರಮಾಡುವನು. ಅವರು ಜೀವಂತ
ರಾಗಿರುವಾಗಲೇ ಅವರ ಚರ್ಮವು ಕೊಳೆತು ಹೋಗು
ವದು. ಅವರ ಕಣ್ಣುಗಳು ಅವು ಇರುವಲ್ಲಿಯೇ ಕೊಳೆತು
ಹೋಗುವವು. ಅವರ ಬಾಯೊಳಗೆ ಅವರ ನಾಲಿಗೆಗಳು
ಕೊಳೆತು ಹೋಗುವವು. 13-15ಆ ಭಯಂಕರವಾದ
ವ್ಯಾಧಿಯು ಶತ್ರುಗಳ ಶಿಬಿರದಲ್ಲಿರುವದು. ಅವರ
ಬಳಿಯಲ್ಲಿರುವ ಕುದುರೆ, ಹೇಸರಕತ್ತೆ, ಒಂಟೆ ಮತ್ತು
ಕತ್ತೆಗಳೆಲ್ಲಾ ಈ ವ್ಯಾಧಿಯಿಂದ ಸಂಕಟ ಪಡುವವು.

ಆ ಸಮಯದಲ್ಲಿ ಆ ಜನರು ನಿಜವಾಗಿಯೂ
ಯೆಹೋವನಿಗೆ ಭಯಪಡುವರು. ಪ್ರತಿಯೊಬ್ಬನೂ ತನ್ನ
ನೆರೆಯವನ ಕೈಗಳನ್ನು ಹಿಡಿದುಕೊಳ್ಳುವನು ಮತ್ತು ಆ
ನೆರೆಯವರು ಪರಸ್ಪರ ಹೊಡೆದಾಡಿಕೊಳ್ಳುವರು.
ಯೆಹೂದವೂ ಜೆರುಸಲೇಮಿನೊಂದಿಗೆ ಕಾದಾಡುವದು.
ಎಲ್ಲಾ ಜನಾಂಗಗಳ ಐಶ್ವರ್ಯವನ್ನು ಪಟ್ಟಣದ ಸುತ್ತಲೂ
ಶೇಖರಿಸಿಟ್ಟಿರುವಾಗಲೂ ಇದು ಸಂಭವಿಸುವುದು. ಆಗ
ಅಲ್ಲಿ ಬಹು ಸಂಖ್ಯೆಯಲ್ಲಿ ಬೆಳ್ಳಿಬಂಗಾರ ಮತ್ತು ಬಟ್ಟೆಗಳ
ರಾಶಿ ಇರುವದು. 16ಜೆರುಸಲೇಮಿನೊಂದಿಗೆ ಯುದ್ಧ
ಮಾಡಲು ಬಂದವರಲ್ಲಿ ಕೆಲವರು ಸಾಯದೆ ಉಳಿ
ಯುವರು. ಅವರೆಲ್ಲರು ಪ್ರತಿವರುಷ ಅರಸನೂ ಸರ್ವ
ಶಕ್ತನೂ ಆಗಿರುವ ಯೆಹೋವನನ್ನು ಆರಾಧಿಸಲು
ಬರುವರು. ಪರ್ಣಶಾಲೆಗಳ ಹಬ್ಬವನ್ನು ಆಚರಿಸಲು
ಬರುವರು. 17ರಾಜನೂ ಸರ್ವಶಕ್ತನೂ ಆಗಿರುವ
ಯೆಹೋವನನ್ನು ಆರಾಧಿಸಲು ಭೂಲೋಕದ ಕುಟುಂಬ
ಗಳ ಯಾವ ಜನರಾದರೂ ಜೆರುಸಲೇಮಿಗೆ ಹೋಗದಿ
ದ್ದಲ್ಲಿ ಅವರ ರಾಜ್ಯಗಳಲ್ಲಿ ಮಳೆಗರೆಯುವದು ನಿಂತು
ಹೋಗುವದು.

18ಈಜಿಪ್ಟಿನಲ್ಲಿರುವ ಯಾವ ಕುಟುಂಬವಾಗಲೀ
ಪರ್ಣಶಾಲೆಗಳ ಹಬ್ಬವನ್ನು ಆಚರಿಸಲು ಬಾರದೆ
ಹೋದಲ್ಲಿ ಯೆಹೋವನು ಶತ್ರುಗಳಿಗೆ ತಂದ ವ್ಯಾಧಿ
ಯನ್ನು ಅವರಿಗೂ ಬರಮಾಡುವನು. 19ಇದು ಬರೇ
ಈಜಿಪ್ಟಿನ ಜನರಿಗೆ ಮಾತ್ರವೇ ಆಗಿರದೆ ಯಾವ ದೇಶವು
ಪರ್ಣಶಾಲೆಗಳ ಹಬ್ಬವನ್ನು ಆಚರಿಸಲು ಬರುವು
ದಿಲ್ಲವೋ ಆ ದೇಶದ ಜನರೂ ಅದೇ ರೋಗಕ್ಕೆ
ತುತ್ತಾಗುವರು.

20ಆ ಸಮಯದಲ್ಲಿ ಸಮಸ್ತವೂ ಯೆಹೋವನಿಗೆ ಸೇರಿ
ದ್ದಾಗಿರುವದು. ಕುದುರೆಗಳ ಮೇಲಿರುವ ಜೇನಿನ
ಮೇಲೂ ‘ಸರ್ವಶಕ್ತನಾದ ಯೆಹೋವನಿಗೆ ಇದು ಮೀಸ
ಲಾಗಿರುವದು’ ಎಂದು ಬರೆಯಲ್ಪಡುವದು.
ಯೆಹೋವನ ಆಲಯದಲ್ಲಿ ಉಪಯೋಗಿಸುವ ಎಲ್ಲಾ
ಮಡಕೆಗಳು ಯಜ್ಞವೇದಿಕೆಯ ಮೇಲೆ ಉಪಯಗಿಸುವ
ಬೋಗುಣಿಗಳಷ್ಟೇ ಮುಖ್ಯವಾಗಿವೆ. 21ವಾಸ್ತವವಾಗಿ
ಜೆರುಸಲೇಮಿನ ಮತ್ತು ಯೆಹೂದದ ಪ್ರತಿಯೊಂದು
ಪಾತ್ರೆಯ ಮೇಲೆ, ‘‘ಸರ್ವಶಕ್ತನಾದ ಯೆಹೋವನಿಗೆ
ಮೀಸಲಾಗಿದೆ’’ ಎಂದು ಬರೆದಿರುತ್ತದೆ. ಯಜ್ಞಗಳನ್ನ
ರ್ಪಿಸಲು ಬರುವ ಜನರೆಲ್ಲರೂ ಆ ಪಾತ್ರೆಗಳನ್ನು ತೆಗೆದು
ಕೊಂಡು ಅವುಗಳಲ್ಲಿ ವಿಶೇಷ ಅಡಿಗೆಯನ್ನು ಮಾಡು
ವರು. ಆ ಸಮಯದಲ್ಲಿ ಸರ್ವಶಕ್ತನಾದ ಯೆಹೋವನ
ಆಲಯದೊಳಗೆ ಯಾವ ವರ್ತಕನೂ ವ್ಯಾಪಾರ
ನಡಿಸುವದಿಲ್ಲ.

# ಮಲಾಕಿ

1 ದೇವರಿಂದ ಬಂದ ಸಂದೇಶ. ಯೆಹೋವದೇವರು
ಮಲಾಕಿಯನ ಮೂಲಕ ಇಸ್ರೇಲರಿಗೆ ಕೊಟ್ಟ
ಸಂದೇಶ.

## ದೇವರು ಇಸ್ರೇಲರನ್ನು ಪ್ರೀತಿಸುತ್ತಾನೆ

2 ಯೆಹೋವನು, ‘‘ನಾನು ನಿಮ್ಮನ್ನೆಲ್ಲಾ ಪ್ರೀತಿಸು
ತ್ತೇನೆ’’ ಎಂದು ಹೇಳುತ್ತಾನೆ. ಆದರೆ ನೀನು, ‘‘ನೀನು
ಪ್ರೀತಿಸುವದಕ್ಕೆ ಗುರುತು ಏನು?’’ ಎಂದು ಕೇಳುತ್ತೀ.
ಯೆಹೋವನು ಅದಕ್ಕುತ್ತರವಾಗಿ, ‘‘ಏಸಾವನು
ಯಾಕೋಬನ ಅಣ್ಣನಲ್ಲವೋ? ಆದರೆ ನಾನು
ಯಾಕೋಬನನ್ನು ಆರಿಸಿಕೊಂಡೆನು. 3 ಏಸಾವನನ್ನು
ನಾನು ಸ್ವೀಕರಿಸಲಿಲ್ಲ. ಏಸಾವನಿರುವ ಬೆಟ್ಟಪ್ರದೇಶವನ್ನು
ನಾನು ಹಾಳು ಮಾಡಿದೆನು. ಈಗ ಕಾಡುನಾಯಿಗಳು
ಮಾತ್ರ ಅಲ್ಲಿ ವಾಸಿಸುತ್ತವೆ.’’
4 ಎದೋಮ್ಯರು ಒಂದುವೇಳೆ ಹೀಗೆ ಹೇಳಿಯಾರು:
‘‘ನಾವು ನಾಶವಾಗಿದ್ದೇವೆ. ಹೌದು, ಆದರೆ ನಾವು ಹಿಂದೆ
ಹೋಗಿ ತಿರುಗಿ ನಮ್ಮ ಪಟ್ಟಣಗಳನ್ನು ಕಟ್ಟುವೆವು.’’
ಸರ್ವಶಕ್ತನಾದ ಯೆಹೋವನು, ‘‘ಅವರು ಪಟ್ಟಣ
ಗಳನ್ನು ತಿರುಗಿ ಕಟ್ಟಿದರೆ ನಾನು ತಿರುಗಿ ನಾಶ ಮಾಡು
ವೆನು’’ ಎಂದು ಹೇಳುತ್ತಾನೆ. ಇದಕ್ಕಾಗಿಯೇ ಜನರು
‘ಎದೋಮ್ ದುಷ್ಟ ಪ್ರಾಂತ್ಯವಾಗಿದೆ, ಯೆಹೋವನು
ನಿರಂತರವಾಗಿ ಅದನ್ನು ದ್ವೇಷಿಸುತ್ತಾನೆ’ ಎಂದು
ಅನ್ನುವರು.
5 ಇದನ್ನು ನೋಡಿದವರಾದ ನೀವು ಹೇಳುತ್ತೀರಿ,
‘‘ಯೆಹೋವನು ಮಹಾದೇವರು. ಇಸ್ರೇಲಿನ ಹೊರಗೂ
ತನ್ನ ಪ್ರತಾಪವನ್ನು ತೋರಿಸುವನು.’’

## ಜನರು ಯೆಹೋವನನ್ನು ಗೌರವಿಸುವುದಿಲ್ಲ

6 ಸರ್ವಶಕ್ತನಾದ ಯೆಹೋವನು ಹೀಗನ್ನುತ್ತಾನೆ,
‘‘ಮಕ್ಕಳು ಹೆತ್ತವರನ್ನು ಗೌರವಿಸುವರು. ಸೇವಕರು ಯಜ
ಮಾನನನ್ನು ಗೌರವಿಸುತ್ತಾರೆ, ನಾನು ನಿಮ್ಮ ತಂದೆಯಾಗಿ
ದ್ದೇನೆ, ಆದರೆ ನನ್ನನ್ನು ಯಾಕೆ ಗೌರವಿಸುವದಿಲ್ಲ? ನಾನು
ನಿಮ್ಮ ಯಜಮಾನನಾಗಿದ್ದೇನೆ, ಆದರೆ ನನ್ನನ್ಯಾಕೆ ಗೌರವಿ
ಸುವದಿಲ್ಲ? ಯಾಜಕರೇ, ನೀವು ನನ್ನ ಹೆಸರನ್ನು
ಗೌರವಿಸುವದಿಲ್ಲ.’’
ಆದರೆ ನೀವು, ‘‘ನಾವು ನಿನಗೆ ಯಾವ ವಿಷಯದಲ್ಲಿ
ಗೌರವ ಕೊಟ್ಟಿಲ್ಲ’’ ಎಂದು ಕೇಳುತ್ತೀರಿ.
7 ‘‘ನನ್ನ ಯಜ್ಞವೇದಿಕೆಗೆ ನೀವು ಅಶುದ್ಧ ರೊಟ್ಟಿಗಳನ್ನು
ಅರ್ಪಿಸುತ್ತೀರಿ’’ ಎಂದು ಯೆಹೋವನು ಹೇಳುತ್ತಾನೆ.
‘‘ಯಾವ ವಿಷಯದಲ್ಲಿ ಅದು ಅಶುದ್ಧವಾಯಿತು?’’
ಎಂದು ನೀವು ಕೇಳುತ್ತೀರಿ.
ಅದಕ್ಕೆ ಯೆಹೋವನು, ‘‘ನನ್ನ ಯಜ್ಞವೇದಿಕೆಯನ್ನು
ನೀವು ಗೌರವಿಸುವದಿಲ್ಲ.
8 ನೀವು ಕುರುಡು ಪ್ರಾಣಿಗಳನ್ನು ಯಜ್ಞಕ್ಕಾಗಿ
ತರುತ್ತೀರಿ. ಅದು ತಪ್ಪಲ್ಲವೇ? ಕುಂಟು, ರೋಗಪೀಡಿತ
ಪಶುಗಳನ್ನು ಯಜ್ಞಾರ್ಪಣೆಗಾಗಿ ತರುತ್ತೀರಿ. ಅದು
ತಪ್ಪಲ್ಲವೇ? ನಿಮ್ಮ ರಾಜ್ಯಪಾಲನಿಗೆ ನೀವು ಅಂಥಾ
ಪ್ರಾಣಿಗಳನ್ನು ಕಾಣಿಕೆಯಾಗಿ ಕೊಟ್ಟರೆ ಅವನು ಅದನ್ನು
ಸ್ವೀಕರಿಸಿಯಾನೋ? ಇಲ್ಲ, ಅಂಥಾ ಕಾಣಿಕೆಯನ್ನು
ಅವನು ಸ್ವೀಕರಿಸುವದೇ ಇಲ್ಲ’’ ಸರ್ವಶಕ್ತನಾದ
ಯೆಹೋವನು ಇದನ್ನು ಹೇಳುತ್ತಿದ್ದಾನೆ.
9 ‘‘ಯಾಜಕರೇ, ಯೆಹೋವನು ನಮಗೆ ಶುಭವನ್ನು
ಉಂಟುಮಾಡುವಂತೆ ಆತನನ್ನು ಕೇಳಬೇಕು. ಆದರೆ
ಆತನು ಕೇಳಲಿಕ್ಕಿಲ್ಲ. ನಿಮ್ಮ ತಪ್ಪು ದೋಷಗಳೇ ಅದಕ್ಕೆ
ಕಾರಣ’’ ಸರ್ವಶಕ್ತನಾದ ಯೆಹೋವನು ಹಾಗನ್ನುತ್ತಾನೆ.
10 ‘‘ನಿಮ್ಮಲ್ಲಿ ಕೆಲವು ಯಾಜಕರು ಆಲಯದ ಬಾಗಿಲು
ಗಳನ್ನು ಮುಚ್ಚಿ ಬೆಂಕಿಯನ್ನು ಸರಿಯಾದ ರೀತಿಯಲ್ಲಿ
ಹಚ್ಚುವರು. ಆದರೆ ನಾನು ನಿಮ್ಮನ್ನು ಮೆಚ್ಚುವದಿಲ್ಲ.
ನಿಮ್ಮ ಕಾಣಿಕೆಗಳನ್ನು ಸ್ವೀಕರಿಸುವದಿಲ್ಲ’’ ಇದು
ಸರ್ವಶಕ್ತನಾದ ಯೆಹೋವನ ನುಡಿ.
11 ‘‘ಭೂಲೋಕದ ಜನರೆಲ್ಲಾ ನನ್ನ ಹೆಸರನ್ನು ಗೌರವಿ
ಸುತ್ತಾರೆ; ಒಳ್ಳೇ ಕಾಣಿಕೆಗಳನ್ನು ತಂದೊಪ್ಪಿಸುತ್ತಾರೆ,
ಪರಿಶುದ್ಧವಾದ ಧೂಪವನ್ನು ಸುಡುತ್ತಾರೆ; ನನಗದನ್ನು
ಕಾಣಿಕೆಯಂತೆ ಅರ್ಪಿಸುತ್ತಾರೆ. ಯಾಕೆ? ಯಾಕೆಂದರೆ
ಅವರಿಗೆಲ್ಲಾ ನನ್ನ ನಾಮ ಘನತರವಾದದ್ದು, ವಿಶೇಷ
ವಾದದ್ದು.’’ ಇದು ಸರ್ವಶಕ್ತನಾದ ಯೆಹೋವನ ನುಡಿ.

12‘‘ಆದರೆ ನೀವು ನನ್ನ ನಾಮವನ್ನು ಘನಪಡಿಸುವ
ದಿಲ್ಲ. ನನ್ನ ಮೇಜು ಅಶುದ್ಧವಾದದ್ದೆಂದು ನೀವು ಹೇಳು
ತ್ತೀರಿ. 13ನೀವು ಆ ಮೇಜಿನಿಂದ ಆಹಾರವನ್ನು ತೆಗೆದು
ಕೊಳ್ಳುವದಿಲ್ಲ. ನೀವು ಆಹಾರವನ್ನು ಮೂಸಿನೋಡಿ
ಅದನ್ನು ತಿನ್ನಲು ನಿರಾಕರಿಸುತ್ತೀರಿ. ಅದು ಚೆನ್ನಾಗಿಲ್ಲ
ಎಂದು ಹೇಳುತ್ತೀರಿ. ಆದರೆ ಅದು ನಿಜವಲ್ಲ. ಆ ಮೇಲೆ,
ನೀವು ರೋಗಪೀಡಿತವಾದ ಕುಂಟಾದ ಮತ್ತು ಕಳುವು
ಮಾಡಿದ ಪಶುಗಳನ್ನು ನನಗರ್ಪಿಸುತ್ತೀರಿ. ಆದರೆ ಅಂಥಾ
ಪಶುಗಳನ್ನು ನಿಮ್ಮಿಂದ ನಾನು ಸ್ವೀಕರಿಸುವದಿಲ್ಲ.
14ನಿಮ್ಮಲ್ಲಿ ಕೆಲವರಲ್ಲಿ ಯಜ್ಞಕ್ಕೆ ಬೇಕಾಗಿರುವ ಒಳ್ಳೇ
ಗಂಡುಪಶುಗಳು ಇದ್ದಾಗ್ಯೂ ಅವರು ನನಗೆ ಅವುಗಳನ್ನು
ಸಮರ್ಪಿಸುವದಿಲ್ಲ. ಕೆಲವರು ಕಳಂಕವಿಲ್ಲದ ಪಶುಗಳನ್ನು
ನನಗೆ ತರುತ್ತಾರೆ. ಅವರು ಅಂಥಾ ಆರೋಗ್ಯಕರ
ಪಶುಗಳನ್ನು ನನಗೆ ಸಮರ್ಪಿಸಲು ವಾಗ್ದಾನ ಮಾಡು
ವರು. ಆದರೆ ಗುಪ್ತವಾಗಿ ಅವರು ಆ ಪಶುವನ್ನು ಬದಲಿಸಿ
ನನಗೆ ರೋಗಿಯಾದ ಪಶುಗಳನ್ನು ಕೊಡುತ್ತಾರೆ. ಅವ
ರಿಗೆ ದುರ್ದೆಶೆ ಸಂಭವಿಸಲಿರುವದು. ನಾನು ದೊಡ್ಡ
ಅರಸನು. ನೀವು ನನ್ನನ್ನು ಗೌರವಿಸಬೇಕು. ಭೂಲೋ
ಕದ ಸರ್ವಜನರು ನನ್ನನ್ನು ಸನ್ಮಾನಿಸುವರು.’’ ಸರ್ವಶಕ್ತ
ನಾದ ಯೆಹೋವನ ನುಡಿಗಳು.

## ಯಾಜಕರ ನಿಯಮಗಳು

2 ‘‘ಯಾಜಕರೇ, ನನ್ನ ಮಾತನ್ನು ಕೇಳಿರಿ. ನಾನು
ಹೇಳುವುದಕ್ಕೆ ಗಮನ ಕೊಡಿರಿ. ಈ ನಿಯಮಗಳನ್ನು
ನಿಮಗಾಗಿ ಹೇಳುತ್ತಿದ್ದೇನೆ. 2ನನ್ನ ನಾಮವನ್ನು ಘನ
ಪಡಿಸದೆ ಹೋದರೆ ಕೆಟ್ಟ ವಿಷಯಗಳು ನಿಮಗೆ ಪ್ರಾಪ್ತಿ
ಯಾಗುವವು. ನೀವು ಆಶೀರ್ವದಿಸುವಿರಿ ಆದರೆ ಅದು
ಶಾಪವಾಗುವದು. ಕೆಟ್ಟ ವಿಷಯಗಳು ನೆರವೇರುವಂತೆ
ನಾನು ಮಾಡುವೆನು. ಯಾಕೆಂದರೆ ನೀವು ನನ್ನ ಹೆಸರನ್ನು
ಘನಪಡಿಸುವದಿಲ್ಲ.’’ ಇದನ್ನು ಸರ್ವಶಕ್ತನಾದ ಯೆಹೋ
ವನು ನುಡಿದಿದ್ದಾನೆ. 3‘‘ನಿನ್ನ ಸಂತತಿಯವರನ್ನು ನಾನು
ಶಿಕ್ಷಿಸುವೆನು. ಹಬ್ಬದ ದಿವಸಗಳಲ್ಲಿ ಯಾಜಕರೇ, ನೀವು
ನನಗೆ ಯಜ್ಞಗಳನ್ನರ್ಪಿಸುತ್ತೀರಿ. ಪಶುವನ್ನು ಕೊಯಿದ
ಬಳಿಕ ಅದರ ಒಳಗಿನ ಭಾಗಗಳನ್ನೂ ಅದರ ಮಲವನ್ನೂ
ತೆಗೆದು ಹೊರಗೆ ಎಸೆಯುತ್ತೀರಿ. ನಾನು ಆ ಮಲವನ್ನು
ನಿಮ್ಮ ಮುಖಗಳಿಗೆ ಹಚ್ಚುವೆನು ಮತ್ತು ನೀವು ಅದ
ರೊಂದಿಗೆ ಹೊರಗೆ ಬಿಸಾಡಲ್ಪಡುವಿರಿ. 4ಆಗ ನೀವು
ನಾನು ಈ ಆಜ್ಞೆಯನ್ನು ಯಾಕೆ ಕೊಡುತ್ತಿದ್ದೇನೆಂದು
ಅರಿಯುವಿರಿ. ಲೇವಿಯರೊಂದಿಗೆ ನಾನು ಮಾಡಿರುವ
ಒಡಂಬಡಿಕೆಯು ಮುಂದುವರಿಯುವ ಹಾಗೆ ನಾನು ಈ
ಸಂಗತಿಗಳನ್ನು ನಿಮಗೆ ತಿಳಿಸುತ್ತಿದ್ದೇನೆ.’’ ಸೇನಾಧೀಶ್ವರ
ನಾದ ಯೆಹೋವನು ಈ ಮಾತುಗಳನ್ನು ಅಂದಿದ್ದಾನೆ.

5ಯೆಹೋವನು ಇಂತೆನ್ನುತ್ತಾನೆ, ‘‘ಆ ಒಡಂಬಡಿಕೆ
ಯನ್ನು ನಾನು ಲೇವಿಯರೊಂದಿಗೆ ಮಾಡಿದೆನು. ನಾನು
ಅವನಿಗೆ ಜೀವ ಮತ್ತು ಸಮಾಧಾನವನ್ನು ವಾಗ್ದಾನ ಮಾಡಿ
ಅವನಿಗೆ ಅದನ್ನು ಕೊಟ್ಟೆನು. ಲೇವಿಯು ನನ್ನನ್ನು ಘನ
ಪಡಿಸಿದನು. ನನ್ನ ಹೆಸರನ್ನು ಗೌರವಿಸಿದನು. 6ಲೇವಿಯು
ಸುಳ್ಳನ್ನು ಸಮರ್ಥಿಸದೆ ಸತ್ಯಬೋಧನೆಯನ್ನು ಬೋಧಿಸಿ
ದನು. ಅವನು ಪ್ರಮಾಣಿಕನಾಗಿದ್ದು ಸಮಾಧಾನವನ್ನು
ಪ್ರೀತಿಸುತ್ತಿದ್ದನು. ಲೇವಿಯು ನನಗೆ ವಿಧೇಯನಾಗಿದ್ದು
ಎಷ್ಟೋ ಮಂದಿ ಕೆಟ್ಟದಾರಿಯಲ್ಲಿ ಹೋಗುತ್ತಿರುವವ
ರನ್ನು ನನ್ನ ಶಿಕ್ಷೆಯಿಂದ ಪಾರುಮಾಡಿದನು. 7ಒಬ್ಬ
ಯಾಜಕನು ಯೆಹೋವನ ಬೋಧನೆಯನ್ನು ಚೆನ್ನಾಗಿ
ಅರಿತಿರಬೇಕು. ಜನರು ಯಾಜಕನ ಬಳಿಗೆ ಹೋಗಿ
ದೇವರ ಬೋಧನೆಯನ್ನು ಕೇಳಿ ತಿಳುಕೊಳ್ಳಬೇಕು.
ಯಾಜಕನು ದೇವರ ಸಂದೇಶವನ್ನು ಜನರಿಗೆ ತಲುಪಿಸು
ವವನಾಗಿರಬೇಕು. 8‘‘ಆದರೆ ಯಾಜಕರೇ, ನೀವು
ನನ್ನನ್ನು ಹಿಂಬಾಲಿಸುವದನ್ನು ನಿಲ್ಲಿಸಿ ಬಿಟ್ಟಿರಿ. ಅನೇಕ
ಜನರು ತಪ್ಪು ದಾರಿಯಲ್ಲಿ ಹೋಗುವಂತೆ ಮಾಡಲು
ನೀವು ಉಪದೇಶವನ್ನು ಬಳಸಿಕೊಂಡಿರಿ. ಲೇವಿ
ಯೊಂದಿಗೆ ಮಾಡಿದ ಒಡಂಬಡಿಕೆಯನ್ನು ನೀವು ಹಾಳು
ಮಾಡಿಬಿಟ್ಟಿರಿ.’’ ಇದು ಸರ್ವಶಕ್ತನಾದ ಯೆಹೋವನ
ನುಡಿ. 9‘‘ನಾನು ಹೇಳಿರುವ ಪ್ರಕಾರ ನೀವು ಜೀವಿಸುತ್ತಿಲ್ಲ.
ನೀವು ನನ್ನ ಉಪದೇಶವನ್ನು ಜನರಿಗೆ ತಿಳಿಸುವಾಗ ಮುಖ
ದಾಕ್ಷಿಣ್ಯ ಮಾಡುತ್ತೀರಿ. ಈ ಕಾರಣದಿಂದಾಗಿ ನಿಮ್ಮನ್ನು
ಗಣನೆಗೆ ಬಾರದವರಂತೆಯೂ ಜನರು ನಿಮ್ಮನ್ನು
ಸನ್ಮಾನಿಸದಂತೆಯೂ ಮಾಡುವೆನು.’’

## ಯೆಹೂದನು ದೇವರಿಗೆ ನಂಬಿಗಸ್ತನಾಗಿರಲಿಲ್ಲ

10ನಮಗೆಲ್ಲರಿಗೂ ಒಬ್ಬನೇ ತಂದೆಯಾದ ದೇವರು. ಆ
ದೇವರೇ ನಮ್ಮೆಲ್ಲರನ್ನು ಉಂಟುಮಾಡಿದನು. ಹೀಗಿರು
ವಾಗ ಜನರು ತಮ್ಮ ಸಹೋದರರನ್ನು ಯಾಕೆ ಮೋಸ
ಪಡಿಸುತ್ತಾರೆ? ಒಡಂಬಡಿಕೆಯನ್ನು ಅವರು ಮಾನ್ಯತೆ
ಮಾಡುವವರೆಂದು ಜನರಿಗೆ ತೋರಿಸುವದಿಲ್ಲ. ತಮ್ಮ
ಪೂರ್ವಿಕರು ಯೆಹೋವನೊಂದಿಗೆ ಮಾಡಿದ್ದ
ಒಡಂಬಡಿಕೆಯನ್ನು ಅವರು ಮಾನ್ಯತೆ ಮಾಡಲಿಲ್ಲ.
11ಯೆಹೂದದ ಜನರು ಬೇರೆ ಜನರಿಗೆ ಮೋಸ ಮಾಡಿ
ದರು. ಜೆರುಸಲೇಮಿನಲ್ಲಿಯೂ ಇಸ್ರೇಲಿನಲ್ಲಿಯೂ
ಇರುವ ಜನರು ಭಯಂಕರ ಕಾರ್ಯಗಳನ್ನು ಮಾಡಿ
ದರು. ದೇವರು ತನ್ನ ಆಲಯವನ್ನು ಪ್ರೀತಿಸುತ್ತಾನೆ. ಆದರೆ
ಯೆಹೂದದ ಜನರು ಗೊತ್ತಿಲ್ಲದ ದೇವತೆಗಳನ್ನು ಪೂಜಿ
ಸಲು ಪ್ರಾರಂಭಿಸುತ್ತಾರೆ. 12ಅಂಥಾ ಜನರನ್ನು
ಯೆಹೋವನು ಯೆಹೂದ ವಂಶದಿಂದಲೇ ತೆಗೆದು
ಹಾಕುವನು. ಅವರು ಯೆಹೋವನಿಗೆ ಕಾಣಿಕೆಗಳನ್ನು

ತೆಗೆದುಕೊಂಡು ಬಂದಾರು. ಆದರೆ ಅದು ಏನೂ
ಪ್ರಯೋಜನವಿಲ್ಲ. 13ನೀವು ಅತ್ತು ಗೋಳಾಡಿ
ಯೆಹೋವನ ವೇದಿಕೆಯನ್ನು ಕಣ್ಣೀರಿನಿಂದ ತೋಯಿಸಿ
ದರೂ ಪ್ರಯೋಜನವಿಲ್ಲ. ಯೆಹೋವನು ನಿಮ್ಮ ಕಾಣಿಕೆ
ಯನ್ನು ಸ್ವೀಕರಿಸುವುದಿಲ್ಲ. ನಿಮ್ಮ ಕಾಣಿಕೆಗಳನ್ನು ಆತನು
ಮೆಚ್ಚುವವನಲ್ಲ.

14“ನಮ್ಮ ಕಾಣಿಕೆಗಳನ್ನು ಯೆಹೋವನು ಏಕೆ
ಸ್ವೀಕರಿಸುವುದಿಲ್ಲ?” ಎಂದು ನೀವು ಕೇಳಬಹುದು.
ಯಾಕೆಂದರೆ ನಿಮ್ಮ ಪಾಪಕೃತ್ಯಗಳನ್ನು ಆತನು ನೋಡಿರು
ತ್ತಾನೆ. ಅವುಗಳಿಗೆ ವಿರೋಧವಾಗಿ ಆತನೇ ಸಾಕ್ಷಿಯಾಗಿರು
ತ್ತಾನೆ. ನಿನ್ನ ಹೆಂಡತಿಯನ್ನು ನೀನು ಮೋಸಗೊಳಿಸಿದ್ದನ್ನು
ಆತನು ನೋಡಿರುತ್ತಾನೆ. ನೀನು ಆಕೆಯನ್ನು ನಿನ್ನ
ಯೌವನ ಕಾಲದಲ್ಲಿ ಹೆಂಡತಿಯನ್ನಾಗಿ ಮಾಡಿಕೊಂಡಿ
ರುತ್ತೀ. ಆಕೆಯು ನಿನ್ನ ಆಪ್ತ ಸ್ನೇಹಿತೆಯಾಗಿದ್ದಳು. ನೀವಿ
ಬ್ಬರೂ ಮಾತುಕೊಟ್ಟಿರಿ. ಆಕೆ ನಿನ್ನ ಹೆಂಡತಿಯಾದಳು.
ಆದರೆ ನೀನು ಅವಳಿಗೆ ಅಪನಂಬಿಗಸ್ಥನಾದೆ. 15ದೇವರ
ಇಚ್ಛೆಗನುಸಾರವಾಗಿ ಗಂಡಹೆಂಡತಿಯರು ದೇಹದ
ಲ್ಲಿಯೂ ಆತ್ಮದಲ್ಲಿಯೂ ಒಂದಾಗಿರಬೇಕು. ಆಗ ಅವರ
ಮಕ್ಕಳೂ ಪರಿಶುದ್ಧರಾಗಿರುವರು. ಆದ್ದರಿಂದ ಆತ್ಮಿಕ
ಅನ್ಯೋನ್ಯತೆಯನ್ನು ಕಾಪಾಡಿಕೊಳ್ಳಿ. ನಿಮ್ಮ ಹೆಂಡತಿ
ಯರಿಗೆ ಮೋಸಮಾಡಬೇಡಿ. ಯಾಕೆಂದರೆ ಯೌವನ
ಪ್ರಾಯದಿಂದಲೂ ಆಕೆ ನಿಮ್ಮ ಹೆಂಡತಿಯಾಗಿದ್ದಾಳೆ.

### ನ್ಯಾಯತೀರ್ಪಿಕೆಯ ವಿಶೇಷವಾದ ಕಾಲ

16ಇಸ್ರೇಲಿನ ದೇವರಾದ ಯೆಹೋವನು ಹೇಳುವದೇ
ನೆಂದರೆ, “ವಿವಾಹ ವಿಚ್ಛೇದನೆಯನ್ನು ನಾನು ಹಗೆ
ಮಾಡುತ್ತೇನೆ. ಮತ್ತು ಮನುಷ್ಯನು ಮಾಡುವ ದುಷ್ಟ
ಕಾರ್ಯವನ್ನು ನಾನು ಹಗೆ ಮಾಡುತ್ತೇನೆ. ಆದುದರಿಂದ
ನಿಮ್ಮ ಆತ್ಮೀಯ ಒಗ್ಗಟ್ಟನ್ನು ಕಾಪಾಡಿಕೊಳ್ಳಿರಿ. ನಿಮ್ಮ
ಹೆಂಡತಿಯಂದಿರಿಗೆ ಮೋಸ ಮಾಡಬೇಡಿರಿ.”

17ನೀವು ಕೆಟ್ಟ ವಿಷಯಗಳನ್ನು ಬೋಧಿಸಿದ್ದೀರಿ. ಅಂಥಾ
ದುರ್ಬೋಧನೆಯು ಆತನನ್ನು ದುಃಖಗೊಳಿಸಿಯದೆ.
ಯೆಹೋವನು ದುಷ್ಟರನ್ನು ಪ್ರೀತಿಸುತ್ತಾನೆ ಎಂದು ಜನ
ರಿಗೆ ಬೋಧಿಸಿದ್ದೀ. ಅಂಥಾ ಜನರನ್ನು ಯೆಹೋವನು
ಒಳ್ಳೆಯವರೆಂದು ಕರೆಯುತ್ತಾನೆ ಎಂದು ನೀನು ಜನರಿಗೆ
ಕಲಿಸಿರುತ್ತೀ. ಅಲ್ಲದೆ ಪಾಪ ಮಾಡುವ ಜನರನ್ನು
ಯೆಹೋವನು ಶಿಕ್ಷಿಸುವದಿಲ್ಲವೆಂದೂ ನೀನು
ಹೇಳಿರುತ್ತೀ.

3 ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ:
“ನನ್ನ ಮಾರ್ಗವನ್ನು ಸಿದ್ಧಮಾಡಲು ನಾನು
ಮುಂದೂತನನ್ನು ಕಳುಹಿಸುತ್ತೇನೆ. ನೀವು ಹುಡುಕುತ್ತಿ
ರುವ ಧಣಿಯು ತನ್ನ ಆಲಯಕ್ಕೆ ಬರುತ್ತಾನೆ. ಹೌದು,
ನಿಮಗೆ ಬೇಕಾಗಿರುವ ಹೊಸ ಒಡಂಬಡಿಕೆಯ ಸಂದೇಶ
ಕನು ನಿಜವಾಗಿಯೂ ಬರುತ್ತಿದ್ದಾನೆ.

2“ಆ ಸಮಯಕ್ಕಾಗಿ ಯಾರೂ ಸಿದ್ಧಮಾಡಿಕೊಳ್ಳ
ಲಾರರು. ಯಾರೂ ಆತನು ಬರುವಾಗ ಆತನಿಗೆ ವಿರುದ್ಧ
ವಾಗಿ ನಿಲ್ಲರು. ಆತನು ಸುಡುವ ಬೆಂಕಿಯಾಗಿರುವನು.
ಆತನು ಶಕ್ತಿಯುತವಾದ ಸಾಬೂನಿನಂತೆ ಕೊಳೆಯನ್ನು
ಹೋಗಲಾಡಿಸಿ ಶುದ್ಧಮಾಡುವನು. 3ಆತನು ಲೇವಿಯ
ರನ್ನು ಶುದ್ಧಮಾಡುವನು. ಅವರನ್ನು ಬೆಂಕಿಯಿಂದ
ಪರಿಶುದ್ಧ ಮಾಡುವನು. ಶುದ್ಧ ಬೆಳ್ಳಿ ಚಿನ್ನದಂತೆ ಆತನು
ಅವರನ್ನು ಶುದ್ಧಿ ಮಾಡುವನು. ಆಗ ಅವರು ಯೆಹೋವ
ನಿಗೆ ಕಾಣಿಕೆಗಳನ್ನು ತರುವರು; ಸರಿಯಾದ ರೀತಿಯಲ್ಲಿ
ಕಾಣಿಕೆಗಳನ್ನು ಅರ್ಪಿಸುವರು. 4ಜೆರುಸಲೇಮಿನಿಂದಲೂ
ಯೆಹೂದದಿಂದಲೂ ಯೆಹೋವನು ಕಾಣಿಕೆಗಳನ್ನು
ಸ್ವೀಕರಿಸುವನು. ಹಿಂದಿನ ಕಾಲದಲ್ಲಿದ್ದಂತೆಯೇ ಈಗಲೂ
ಆಗುವದು. ಬಹಳ ವರುಷಗಳ ಹಿಂದಿನ ಕಥೆಯೇ
ಈಗಲೂ ಆಗುವದು. 5ಆಗ ನಾನು ನಿಮ್ಮ ಬಳಿಗೆ ಬಂದು
ಯೋಗ್ಯವಾದ ಕಾರ್ಯವನ್ನು ಮಾಡುವೆನು. ದುಷ್ಟ
ಕ್ರಿಯೆಗಳನ್ನು ಮಾಡಿದ ಜನರ ಬಗ್ಗೆ ನ್ಯಾಯಾಧೀಶ
ರೊಡನೆ ದೂರು ಹೇಳುವ ಮನುಷ್ಯನಂತಿರುವೆನು.
ಕೆಲವರು ಮಾಟಮಂತ್ರ ಮಾಡುವರು; ಕೆಲವರು ವ್ಯಭಿ
ಚಾರ ಮಾಡುವರು; ಕೆಲವರು ಸುಳ್ಳು ವಾಗ್ದಾನಗಳನ್ನು
ಮಾಡುವರು; ಕೆಲವರು ಕೂಲಿಯಾಳುಗಳಿಗೆ ಹೇಳಿದ
ಕೂಲಿಯನ್ನು ಕೊಡದೆ ಅವರಿಗೆ ಮೋಸಮಾಡುವರು.
ಜನರು ವಿಧವೆಯರಿಗೂ ಅನಾಥರಿಗೂ ಸಹಾಯ
ಮಾಡುವದಿಲ್ಲ. ಪರದೇಶಿಗಳಿಗೆ ಸಹಾಯ ಮಾಡುವ
ದಿಲ್ಲ. ನನಗೆ ಗೌರವ ಸಲ್ಲಿಸುವದಿಲ್ಲ.” ಇದು ಸರ್ವಶಕ್ತ
ನಾದ ಯೆಹೋವನ ನುಡಿ.

### ದೇವರಿಂದ ಕದ್ದುಕೊಳ್ಳುವದು

6“ನಾನು ಯೆಹೋವನಾದ ದೇವರು. ನಾನು ಬದ
ಲಾಗದ ದೇವರು. ನೀವು ಯಾಕೋಬನ ಮಕ್ಕಳು. ನೀವು
ಸಂಪೂರ್ಣವಾಗಿ ನಾಶ ಹೊಂದಲಿಲ್ಲ. 7ನೀವು ನನ್ನ
ಆಜ್ಞೆಗಳಿಗೆ ವಿಧೇಯರಾಗಲಿಲ್ಲ. ನಿಮ್ಮ ಪೂರ್ವಿಕರು
ನನ್ನನ್ನು ಅನುಸರಿಸುವದನ್ನು ನಿಲ್ಲಿಸಿ ಬಿಟ್ಟಿದ್ದರು. ನೀವು
ಹಿಂತಿರುಗಿ ನನ್ನ ಬಳಿಗೆ ಬಂದರೆ ನಾನು ನಿಮ್ಮ ಬಳಿಗೆ
ಬರುವೆನು.” ಇದು ಸರ್ವಶಕ್ತನಾದ ಯೆಹೋವನ ನುಡಿ.

“ನಾವು ಹೇಗೆ ಹಿಂತಿರುಗಿ ಬರಬಹುದು?” ಎಂದು
ನೀವು ಕೇಳುತ್ತೀರೋ? 8ದೇವರಿಂದ ಕದ್ದುಕೊಳ್ಳು
ವದನ್ನು ನಿಲ್ಲಿಸಿರಿ. ಮನುಷ್ಯರು ದೇವರಿಂದ ಕದ್ದುಕೊಳ್ಳ
ಬಾರದು. ಆದರೆ ನೀವು ನನ್ನಿಂದ ಕದ್ದುಕೊಂಡಿದ್ದೀರಿ.

“ನಿನ್ನಿಂದ ಏನು ಕದ್ದುಕೊಂಡಿದ್ದೇವೆ” ಎಂದು
ಕೇಳುತ್ತೀರಾ?

‘‘ನಿಮ್ಮ ದಶಮಭಾಗವನ್ನು ನೀವು ನನಗೆ ಅರ್ಪಿಸ
ಬೇಕಿತ್ತು. ವಿಶೇಷ ಕಾಣಿಕೆಗಳನ್ನು ನೀವು ನನಗೆ ಕೊಡ
ಬೇಕಾಗಿತ್ತು. ಆದರೆ ನೀವು ಹಾಗೆ ಮಾಡಲಿಲ್ಲ. [9]ಈ ರೀತಿ
ಯಾಗಿ ನಿಮ್ಮ ಇಡೀ ಜನಾಂಗವೇ ನನ್ನಿಂದ ಕದ್ದು
ಕೊಂಡಿದ್ದಾರೆ. ಆದುದರಿಂದ ನಿಮಗೆ ದುರ್ದೆಶೆ ಸಂಭವಿ
ಸುತ್ತಲಿದೆ.’’ ಇದು ಸರ್ವಶಕ್ತನಾದ ಯೆಹೋವನ ನುಡಿ.
[10]ಸರ್ವಶಕ್ತನಾದ ಯೆಹೋವನು ಹೇಳುವದೇ
ನೆಂದರೆ, ‘‘ನೀವು ಈ ಪರೀಕ್ಷೆ ಮಾಡಿನೋಡಿ. ನಿಮ್ಮ
ವಸ್ತುಗಳ ಹತ್ತನೇ ಒಂದು ಅಂಶವನ್ನು ನನಗೆ ತೆಗೆದು
ಕೊಂಡು ಬನ್ನಿರಿ. ಅವುಗಳನ್ನು ಆಲಯದ ಬಂಡಾರ
ದೊಳಗೆ ಹಾಕಿರಿ. ನನ್ನ ಮನೆಗೆ ನೀವು ಆಹಾರ ವಸ್ತುಗಳನ್ನು
ತನ್ನಿರಿ. ನನ್ನನ್ನು ಪರೀಕ್ಷಿಸಿರಿ. ನೀವು ಹೀಗೆ ಮಾಡುವ
ದಾದರೆ ಖಂಡಿತವಾಗಿಯೂ ನಾನು ನಿಮ್ಮನ್ನು ಆಶೀರ್ವದಿ
ಸುವೆನು. ಆಕಾಶದಿಂದ ಮಳೆ ಸುರಿಯುವ ಹಾಗೆ ನಿಮಗೆ
ಶುಭವು ಸುರಿಯುವವು. ನಿಮ್ಮ ಮನೆಯಲ್ಲಿ ಬೇಕಾಗಿರು
ವದಕ್ಕಿಂತ ಹೆಚ್ಚು ಯಾವಾಗಲೂ ಇರುವದು. [11]ನಿಮ್ಮ
ಬೆಳೆಗಳು ಹುಳುಗಳಿಂದ ನಾಶವಾಗದಂತೆ ನಾನು ಸಂರಕ್ಷಿ
ಸುವೆನು; ನಿಮ್ಮ ದ್ರಾಕ್ಷಾಲತೆಗಳೆಲ್ಲಾ ದ್ರಾಕ್ಷಿಯನ್ನು ಫಲಿ
ಸುವವು.’’ ಇದು ಸರ್ವಶಕ್ತನಾದ ಯೆಹೋವನ ನುಡಿ.
[12]‘‘ಇತರ ಜನಾಂಗಗಳವರು ನಿಮ್ಮೊಂದಿಗೆ ಸಮಾಧಾನ
ದಿಂದಿರುವರು. ನಿಜವಾಗಿಯೂ ನಿಮ್ಮ ದೇಶವು ಆಗ
ಆಶ್ಚರ್ಯಕರವಾದ ದೇಶವಾಗಿರುವುದು.’’ ಇದು
ಸರ್ವಶಕ್ತನಾದ ಯೆಹೋವನ ನುಡಿ.

## ನ್ಯಾಯತೀರ್ಪಿನ ವಿಶೇಷ ಕಾಲ

[13]ಯೆಹೋವನು ಇಂತೆನ್ನುತ್ತಾನೆ, ‘‘ನೀವು ನನಗೆ
ವಿರುದ್ಧವಾಗಿ ಹೇಯ ಮಾತುಗಳನ್ನಾಡಿದಿರಿ.’’ ಆದಕ್ಕೆ
ನೀವು ‘‘ನಿನ್ನ ವಿರುದ್ಧವಾಗಿ ಏನು ಹೇಳಿದ್ದೇವೆ?’’ ಎಂದು
ಕೇಳುತ್ತೀರಿ. [14]ನೀವು ‘‘ದೇವರಾದ ಯೆಹೋವನನ್ನು
ಆರಾಧಿಸುವುದು ನಿಷ್ಪ್ರಯೋಜಕ. ಆತನ ಕಟ್ಟಳೆಗಳನ್ನು
ನಾವು ಅನುಸರಿಸಿದೆವು. ಆದರೆ ಅದರಲ್ಲಿ ನಮಗೇನೂ
ಲಾಭ ವಾಗಲಿಲ್ಲ. ಸಮಾಧಿಯಲ್ಲಿ ಜನರು ರೋಧಿಸುವ
ಹಾಗೆ ನಮ್ಮ ಪಾಪಗಳಿಗಾಗಿ ನಾವು ರೋಧಿಸಿದೆವು. ಆದರೆ
ಅದ ರಿಂದ ನಮಗೇನೂ ಸಹಾಯವಾಗಲಿಲ್ಲ. [15]ಗರ್ವದ
ಜನರು ಸಂತೋಷವಾಗಿದ್ದಾರೆ ಎಂದು ನಾವು ತಿಳಿಯು
ತ್ತೇವೆ. ದುಷ್ಟಜನರು ಸಫಲತೆ ಹೊಂದುತ್ತಿದ್ದಾರೆ, ದೇವರ
ತಾಳ್ಮೆಯನ್ನು ಪರೀಕ್ಷಿಸಲು ದುಷ್ಕೃತ್ಯಗಳನ್ನು ಮಾಡುತ್ತಿ
ದ್ದಾರೆ. ಆದರೆ ದೇವರು ಅವರನ್ನು ಶಿಕ್ಷಿಸಲಿಲ್ಲ’’ ಎಂದು
ಹೇಳಿದಿರಿ.
[16]ದೇವರನ್ನು ಅನುಸರಿಸುವ ಭಕ್ತರು ಒಬ್ಬರಿಗೊಬ್ಬರು
ಮಾತನಾಡಿಕೊಳ್ಳಲು ಯೆಹೋವನು ಆಲೈಸಿದನು. ಆತನ
ಮುಂದೆ ದೇವಜನರ ಹೆಸರುಗಳನ್ನು ಬರೆದಿರುವ ಒಂದು
ಪುಸ್ತಕವಿತ್ತು. ಯೆಹೋವನ ಹೆಸರನ್ನು ಘನಪಡಿಸುವವರ
ಹೆಸರುಗಳು ಅದರಲ್ಲಿದ್ದವು.
[17]ಯೆಹೋವನು ಹೇಳುವದೇನೆಂದರೆ, ‘‘ಅವರು ನನ್ನ
ಜನರು. ನಾನು ಅವರಿಗೆ ಕರುಣೆ ತೋರಿಸುವೆನು.
ತಂದೆಯು ತನಗೆ ವಿಧೇಯತೆ ತೋರಿಸುವ ತನ್ನ ಮಕ್ಕಳಿಗೆ
ಕನಿಕರವುಳ್ಳವನಾಗಿರುತ್ತಾನೆ. ಅದೇ ರೀತಿಯಲ್ಲಿ ನನ್ನನ್ನು
ಅನುಸರಿಸುವವರ ಮೇಲೆ ನಾನು ದಯೆ ತೋರಿಸುವೆನು.
[18]ನೀವು ನನ್ನ ಬಳಿಗೆ ಹಿಂತಿರುಗಿ ಬರುವಿರಿ. ಆಗ ನೀವು
ಒಳ್ಳೆಯವರಿಗೂ ಕೆಟ್ಟವರಿಗೂ ಇರುವ ವ್ಯತ್ಯಾಸವನ್ನು
ತಿಳಿದುಕೊಳ್ಳುವಿರಿ. ಆಗ ನೀವು ದೇವರನ್ನು ಹಿಂಬಾಲಿಸು
ವವರಿಗೂ ಹಿಂಬಾಲಿಸದೆ ಇರುವವರಿಗೂ ಇರುವ
ವ್ಯತ್ಯಾಸವನ್ನು ನೋಡುವಿರಿ.

4 ‘‘ಆ ನ್ಯಾಯತೀರ್ಪಿನ ದಿನವು ಬರುತ್ತಿದೆ. ಅದು
ಕುಲುಮೆಯಂತೆ ತೀಕ್ಷ್ಣವಾಗಿರುವದು. ಅಹಂಕಾರಿ
ಗಳೆಲ್ಲಾ ಶಿಕ್ಷಿಸಲ್ಪಡುವರು. ದುಷ್ಟಜನರೆಲ್ಲಾ ಹುಲ್ಲಿನಂತೆ
ಸುಡುವರು. ಆ ಸಮಯದಲ್ಲಿ ಒಂದು ಪೊದೆ ಬೆಂಕಿ ಯಲ್ಲಿ
ಸುಡುವಂತೆ ಸುಡುವರು. ಅದರ ಕೊಂಬೆ ಅಥವಾ ಬೇರು
ಯಾವದೂ ಉಳಿಯುವದಿಲ್ಲ.’’ ಇದು ಸರ್ವಶಕ್ತ ನಾದ
ಯೆಹೋವನ ನುಡಿ.
[2]‘‘ನನ್ನನ್ನು ಹಿಂಬಾಲಿಸುವವರ ಮೇಲೆ ಸೂರ್ಯನ
ಪ್ರಕಾಶದಂತೆ ಶುಭವು ಪ್ರಕಾಶಿಸುವದು. ಸೂರ್ಯನ
ಕಿರಣಗಳಂತೆ ಅದು ಗುಣಪಡಿಸುವ ಶಕ್ತಿಯನ್ನು
ಹೊಂದುವದು. ಕೊಟ್ಟಿಗೆಯಿಂದ ಬಿಟ್ಟ ಕರುಗಳಂತೆ
ನೀವು ಸ್ವತಂತ್ರರಾಗಿಯೂ ಸಂತೋಷವಾಗಿಯೂ
ಇರುವಿರಿ. [3]ಆಗ ನೀವು ದುಷ್ಟಜನರ ಮೇಲೆ
ನಡೆದುಕೊಂಡು ಹೋಗುವಿರಿ; ಅವರು ನಿಮ್ಮ ಕಾಲುಗಳ
ಕೆಳಗೆ ಬೂದಿಯಂತಿರುವರು. ನ್ಯಾಯತೀರ್ಪಿನ ಸಮಯ
ದಲ್ಲಿ ನಾನು ಹಾಗೆ ಮಾಡುವೆನು.’’ ಇದು ಸರ್ವಶಕ್ತನಾದ
ಯೆಹೋವನ ನುಡಿ.
[4]‘‘ನನ್ನ ಸೇವಕನಾದ ಮೋಶೆಯ ಕಟ್ಟಳೆಗಳನ್ನು
ಅನುಸರಿಸಲು ಮರೆಯಬೇಡಿ. ಹೋರೇಬ್ ಬೆಟ್ಟದಲ್ಲಿ
ನಾನು ಆ ನ್ಯಾಯವಿಧಿಗಳನ್ನು ಅವನಿಗೆ ಕೊಟ್ಟೆನು. ಆ
ಕಟ್ಟಳೆಗಳೆಲ್ಲಾ ಇಸ್ರೇಲ್ ಜನರಿಗಾಗಿ ಇರುವದು.’’
[5]ಯೆಹೋವನು ಇಂತೆನ್ನುತ್ತಾನೆ, ‘‘ನಾನು ಪ್ರವಾದಿ
ಯಾದ ಎಲೀಯನನ್ನು ನಿಮ್ಮ ಬಳಿಗೆ ಕಳುಹಿಸುವೆನು.
ಅವನು ಯೆಹೋವನಿಂದ ಪ್ರಾಪ್ತಿಯಾಗುವ ಭಯಂಕರ
ವಾದ ಮಹಾ ನ್ಯಾಯತೀರ್ಪಿನ ಕಾಲದಲ್ಲಿ ಬರುವನು.
[6]ತಂದೆತಾಯಿಗಳು ಮಕ್ಕಳಿಗೂ ಮಕ್ಕಳು ತಂದೆತಾಯಿ
ಗಳಿಗೂ ನಿಕಟ ಸಂಬಂಧಿಗಳಾಗುವಂತೆ ಅವನು ಮಾಡು
ವನು. ಇದು ನೆರವೇರಲೇಬೇಕು. ಇಲ್ಲದಿದ್ದಲ್ಲಿ ನಾನು
ಬಂದು ನಿಮ್ಮ ದೇಶವನ್ನು ಸಂಪೂರ್ಣವಾಗಿ ನಾಶ
ಮಾಡುವೆನು.’’.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**

- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html

# ಮತ್ತಾಯನ ಸುವಾರ್ತೆ

### ಯೇಸುವಿನ ವಂಶಾವಳಿ

(ಲೂಕ 3:23-38)

1 ಯೇಸುಕ್ರಿಸ್ತನ ವಂಶಾವಳಿಯಿದು. ಆತನು ದಾವೀದನ
ವಂಶದವನು. ದಾವೀದನು ಅಬ್ರಹಾಮನ ವಂಶದವನು.

2 ಅಬ್ರಹಾಮನು ಇಸಾಕನ ತಂದೆ.
ಇಸಾಕನು ಯಾಕೋಬನ ತಂದೆ.
ಯಾಕೋಬನು ಯೂದ ಮತ್ತು ಅವನ
ಸಹೋದರರ ತಂದೆ.
3 ಯೂದನು ಪೆರೆಚನ ಮತ್ತು ಜೆರಹನ ತಂದೆ.
(ಅವರ ತಾಯಿ ತಾಮರಳು.)
ಪೆರೆಚನು ಹೆಜ್ರೋನನ ತಂದೆ.
ಹೆಜ್ರೋನನು ಅರಾಮನ ತಂದೆ.
4 ಅರಾಮನು ಅಮ್ಮಿನಾದಾಬನ ತಂದೆ.
ಅಮ್ಮಿನಾದಾಬನು ನಹಶೋನನ ತಂದೆ.
ನಹಶೋನನು ಸಲ್ಮೋನನ ತಂದೆ.
5 ಸಲ್ಮೋನನು ಬೋವಜನ ತಂದೆ.
(ಬೋವಜನ ತಾಯಿ ರಹಾಬಳು.)
ಬೋವಜನು ಓಬೇದನ ತಂದೆ.
(ಓಬೇದನ ತಾಯಿ ರೂತಳು.)
ಓಬೇದನು ಇಷಯನ ತಂದೆ.
6 ಇಷಯನು ಅರಸನಾದ ದಾವೀದನ ತಂದೆ.
ದಾವೀದನು ಸೊಲೊಮೋನನ ತಂದೆ.
(ಸೊಲೊಮೋನನ ತಾಯಿ
ಊರೀಯನ ಹೆಂಡತಿಯಾಗಿದ್ದಳು.)
7 ಸೊಲೊಮೋನನು ರೆಹಬ್ಬಾಮನ ತಂದೆ.
ರೆಹಬ್ಬಾಮನು ಅಬೀಯನ ತಂದೆ.
ಅಬೀಯನು ಆಸನ ತಂದೆ.
8 ಆಸನು ಯೆಹೋಷಾಫಾಟನ ತಂದೆ.
ಯೆಹೋಷಾಫಾಟನು ಯೆಹೋರಾಮನ
ತಂದೆ.
ಯೆಹೋರಾಮನು ಉಜ್ಜೀಯನ ತಂದೆ.
9 ಉಜ್ಜೀಯನು ಯೋತಾಮನ ತಂದೆ.
ಯೋತಾಮನು ಆಹಾಜನ ತಂದೆ.
ಆಹಾಜನು ಹಿಜ್ಕೀಯನ ತಂದೆ.
10 ಹಿಜ್ಕೀಯನು ಮನಸ್ಸೆಯ ತಂದೆ.
ಮನಸ್ಸೆಯು ಆಮೋನನ ತಂದೆ.
ಆಮೋನನು ಯೋಷೀಯನ ತಂದೆ.
11 ಯೋಷೀಯನು ಯೆಕೊನ್ಯ ಮತ್ತು
ಅವನ ಸಹೋದರರ ತಂದೆ.
(ಈ ಸಮಯದಲ್ಲಿಯೇ ಯೆಹೂದ್ಯ
ಜನರನ್ನು ಗುಲಾಮಗಿರಿಗಾಗಿ
ಬಾಬಿಲೋನಿಗೆ ಕೊಂಡೊಯ್ದದ್ದು.)
12 ಯೆಹೂದ್ಯರನ್ನು ಬಾಬಿಲೋನಿಗೆ ಕೊಂಡೊಯ್ದ
ನಂತರದ ಕುಟುಂಬದ ಚರಿತ್ರೆ:
ಯೆಕೊನ್ಯನು ಶೆಯಲ್ತಿಯೇಲನ ತಂದೆ.
ಶೆಯಲ್ತಿಯೇಲನು ಜೆರುಬ್ಬಾಬೆಲನ ತಂದೆ.
13 ಜೆರುಬ್ಬಾಬೆಲನು ಅಬಿಹೂದನ ತಂದೆ.
ಅಬಿಹೂದನು ಎಲ್ಯಕೀಮನ ತಂದೆ.
ಎಲ್ಯಕೀಮನು ಆಜೋರನ ತಂದೆ.
14 ಆಜೋರನು ಸದೋಕನ ತಂದೆ.
ಸದೋಕನು ಅಖೀಮನ ತಂದೆ.
ಅಖೀಮನು ಎಲಿಹೂದನ ತಂದೆ.
15 ಎಲಿಹೂದನು ಎಲಿಯಾಜರನ ತಂದೆ.
ಎಲಿಯಾಜರನು ಮತ್ತಾನನ ತಂದೆ.
ಮತ್ತಾನನು ಯಾಕೋಬನ ತಂದೆ.
16 ಯಾಕೋಬನು ಯೋಸೇಫನ ತಂದೆ.
ಯೋಸೇಫನು ಮರಿಯಳ ಗಂಡ.
ಮರಿಯಳು ಯೇಸುವಿನ ತಾಯಿ.
ಯೇಸುವನ್ನು ಕ್ರಿಸ್ತ* ನೆಂದು ಕರೆಯುತ್ತಿದ್ದರು.

17 ಅಬ್ರಹಾಮನಿಂದಿಡಿದು ದಾವೀದನವರೆಗೆ ಹದಿನಾಲ್ಕು
ತಲೆಮಾರುಗಳು. ದಾವೀದನಿಂದಿಡಿದು ಬಾಬಿಲೋನಿಗೆ
ಸೆರೆಹೊಯ್ದ ಸಮಯದವರೆಗೆ ಹದಿನಾಲ್ಕು ತಲೆಮಾರುಗಳು.
ಬಾಬಿಲೋನಿಗೆ ಸೆರೆಹಿಡಿದುಕೊಂಡು ಹೋದಂದಿನಿಂದ
ಕ್ರಿಸ್ತನು ಹುಟ್ಟುವವರೆಗೆ ಹದಿನಾಲ್ಕು ತಲೆಮಾರುಗಳು.

### ಯೇಸು ಕ್ರಿಸ್ತನ ಜನನ

(ಲೂಕ 2:1-7)

18 ಯೇಸು ಕ್ರಿಸ್ತನ ತಾಯಿ ಮರಿಯಳು. ಯೇಸುವಿನ ಜನನ
ಈ ರೀತಿ ಸಂಭವಿಸಿತು: ಮದುವೆ ಮಾಡಿಕೊಳ್ಳಲು
ಯೋಸೇಫನಿಗೂ ಮರಿಯಳಿಗೂ ನಿಶ್ಚಿತಾರ್ಥವಾಗಿತ್ತು. ಆದರೆ
ಮದುವೆಗೆ ಮೊದಲೇ ತಾನು ಗರ್ಭಿಣಿಯಾಗಿರುವುದು

---

**ಕ್ರಿಸ್ತನು** ಇದರರ್ಥ 'ಅಭಿಷಿಕ್ತನು' (ಮೆಸ್ಸೀಯನು) ಅಥವಾ ದೇವರಿಂದ ಆರಿಸಲ್ಪಟ್ಟವನು.

ಮರಿಯಳಿಗೆ ತಿಳಿದುಬಂತು. ಮರಿಯಳು ಪವಿತ್ರಾತ್ಮನ
ಪ್ರಭಾವದಿಂದ ಗರ್ಭಿಣಿಯಾಗಿದ್ದಳು. 19ಮರಿಯಳನ್ನು
ಮದುವೆಯಾಗಲಿದ್ದ ಯೋಸೇಫನು ನೀತಿವಂತನಾಗಿದ್ದನು.
ಮರಿಯಳನ್ನು ಜನರ ಮುಂದೆ ನಾಚಿಕೆಪಡಿಸಲು ಅವನು ಇಷ್ಟ
ಪಡಲಿಲ್ಲ. ಆದ್ದರಿಂದ ಅವನು ಗುಟ್ಟಾಗಿ ನಿಶ್ಚಿತಾರ್ಥವನ್ನು ರದ್ದು
ಗೊಳಿಸಬೇಕೆಂದಿದ್ದನು.

20ಯೋಸೇಫನು ಹೀಗೆ ಆಲೋಚಿಸಿಕೊಂಡನಂತರ, ಪ್ರಭು
ವಿನ ದೂತನು ಯೋಸೇಫನಿಗೆ ಕನಸಿನಲ್ಲಿ ಕಾಣಿಸಿಕೊಂಡನು.
ಆ ದೂತನು, ‘‘ದಾವೀದನ ಮಗನಾದ* ಯೋಸೇಫನೇ,
ಮರಿಯಳನ್ನು ನಿನ್ನ ಹೆಂಡತಿಯಾಗಿ ಸ್ವೀಕರಿಸಲು ಭಯಪಡ
ಬೇಡ. ಆಕೆ ಪವಿತ್ರಾತ್ಮನ ಪ್ರಭಾವದಿಂದ ಗರ್ಭಿಣಿಯಾಗಿದ್ದಾಳೆ.
21ಆಕೆ ಒಬ್ಬ ಮಗನನ್ನು ಹೆರುವಳು. ನೀನು ಆ ಮಗನಿಗೆ ಯೇಸು
ಎಂದು ಹೆಸರಿಡುವೆ. ನೀನು ಆತನಿಗೆ ಆ ಹೆಸರನ್ನೇ ಇಡು;
ಏಕೆಂದರೆ ಆತನು ತನ್ನ ಜನರನ್ನು ಅವರ ಪಾಪಗಳಿಂದ ರಕ್ಷಿಸು
ವನು’’ ಎಂದು ಹೇಳಿದನು.

22ಪ್ರವಾದಿಯ ಮೂಲಕ ಪ್ರಭು ತಿಳಿಸಿದ್ದೆಲ್ಲ ನೆರವೇರುವಂತೆ
ಇದೆಲ್ಲಾ ನಡೆಯಿತು. 23ಅದೇನಂದರೆ: ‘‘ಕನ್ನಿಕೆಯೊಬ್ಬಳು
ಗರ್ಭಿಣಿಯಾಗಿ ಒಬ್ಬ ಮಗನಿಗೆ ಜನ್ಮ ಕೊಡುತ್ತಾಳೆ. ಆತನಿಗೆ
ಇಮ್ಮಾನುವೇಲ್ ಎಂಬ ಹೆಸರನ್ನು ಇಡುವರು.’’* (ಇಮ್ಮಾನು
ವೇಲ್ ಎಂದರೆ ‘‘ದೇವರು ನಮ್ಮ ಸಂಗಡ ಇದ್ದಾನೆ’’
ಎಂದರ್ಥ.)

24ಯೋಸೇಫನು ಎಚ್ಚರಗೊಂಡ ಮೇಲೆ ಪ್ರಭುವಿನ
ದೂತನು ಕನಸಿನಲ್ಲಿ ಹೇಳಿದ್ದಂತೆಯೇ ಮರಿಯಳನ್ನು
ಪತ್ನಿಯನ್ನಾಗಿ ಸ್ವೀಕರಿಸಿಕೊಂಡನು. 25ಆದರೆ ಮರಿಯಳು
ಮಗನನ್ನು ಹೆರುವ ತನಕ ಯೋಸೇಫನು ಅವಳೊಂದಿಗೆ ಶರೀರ
ಸಂಬಂಧವಿಲ್ಲದೆ ಇದ್ದನು. ಯೋಸೇಫನು ಆ ಮಗುವಿಗೆ
‘‘ಯೇಸು‘‘ ಎಂದು ಹೆಸರಿಟ್ಟನು.

### ಯೇಸುವನ್ನು ಸಂಧಿಸಲು ಜ್ಞಾನಿಗಳ ಆಗಮನ

2 ಹೆರೋದನು ರಾಜನಾಗಿದ್ದ ಕಾಲದಲ್ಲಿ ಯೇಸು
ಜುದೇಯದ ಬೆತ್ಲೆಹೇಮ್ ಎಂಬ ಊರಲ್ಲಿ ಹುಟ್ಟಿದನು.
ಯೇಸು ಹುಟ್ಟಿದ ಮೇಲೆ, ಪೂರ್ವ ದೇಶದ ಕೆಲವು ಜ್ಞಾನಿಗಳು
ಜೆರುಸಲೇಮಿಗೆ ಬಂದರು. 2ಆ ಜ್ಞಾನಿಗಳು ಜನರಿಗೆ,
‘‘ಯೆಹೂದ್ಯರ ರಾಜನು ಹುಟ್ಟಿದ್ದಾನಲ್ಲವೇ? ಆತನೆಲ್ಲಿ?
ಆತನು ಹುಟ್ಟಿದನೆಂದು ಸೂಚಿಸುವ ನಕ್ಷತ್ರ ಪೂರ್ವದಲ್ಲಿ
ಉದಯಿಸಿದ್ದನ್ನು ಕಂಡು ಆತನನ್ನು ಆರಾಧಿಸಲು ಬಂದೆವು’’
ಅಂದರು.

3ಯೆಹೂದ್ಯರ ಈ ಹೊಸ ರಾಜನ ವಿಷಯ ತಿಳಿದಾಗ
ಹೆರೋದನು ಮತ್ತು ಜೆರುಸಲೇಮಿನ ಜನರೆಲ್ಲರೂ ಗಲಿಬಿಲಿ
ಗೊಂಡರು. 4ಕೂಡಲೇ, ಹೆರೋದನು ಎಲ್ಲಾ ಮಹಾಯಾಜಕ
ರನ್ನೂ ಧರ್ಮೋಪದೇಶಕರನ್ನೂ ಸಭೆ ಸೇರಿಸಿ, ‘‘ಕ್ರಿಸ್ತನು ಹುಟ್ಟ
ಬೇಕಾಗಿದ್ದ ಸ್ಥಳ ಯಾವುದು’’ ಎಂದು ಕೇಳಿದನು. 5ಅವರು,
‘‘ಜುದೇಯದ ಬೆತ್ಲೆಹೇಮ್ ಎಂಬ ಊರಲ್ಲಿ ಹುಟ್ಟುವನು.
ಏಕೆಂದರೆ ಪ್ರವಾದಿಯು ಪವಿತ್ರ ಗ್ರಂಥದಲ್ಲಿ* ಹೀಗೆಂದು
ಬರೆದಿದ್ದಾನೆ:

6 ‘ಜುದೇಯ ಪ್ರಾಂತ್ಯದಲ್ಲಿರುವ ಬೆತ್ಲೆಹೇಮೇ,
ಜುದೇಯವನ್ನು ಆಳುವವರಲ್ಲಿ ನೀನು
ಪ್ರಾಮುಖ್ಯವಾಗಿರುವೆ. ಹೌದು, ಅಧಿಪತಿ
ಯೊಬ್ಬನು ನಿನ್ನೊಳಗಿಂದ ಬರುವನು. ನನ್ನ
ಜನರಾದ ಇಸ್ರೇಲರನ್ನು ಆತನೇ ಮುನ್ನಡೆ
ಸುವನು.’

*ಮೀಕ 5:2*

ಎಂದು ಉತ್ತರ ಕೊಟ್ಟರು.

7ಆಗ ಹೆರೋದನು ಪೂರ್ವದೇಶದ ಜ್ಞಾನಿಗಳನ್ನು
ರಹಸ್ಯವಾಗಿ ಕರೆಯಿಸಿ, ಅವರು ಆ ನಕ್ಷತ್ರವನ್ನು ಕಂಡ ಸರಿಯಾದ
ಸಮಯವನ್ನು ಅವರಿಂದ ತಿಳಿದುಕೊಂಡನು. 8ಹೆರೋದನು ಆ
ಜ್ಞಾನಿಗಳಿಗೆ, ‘‘ನೀವು ಹೋಗಿ ಚೆನ್ನಾಗಿ ವಿಚಾರಣೆ ಮಾಡಿ ಆ
ಮಗು ಎಲ್ಲಿದೆ ಎಂಬುದನ್ನು ತಿಳಿದುಕೊಳ್ಳಿರಿ. ನಂತರ ಬಂದು
ನನಗೆ ತಿಳಿಸಿರಿ. ಆಗ ನಾನೂ ಹೋಗಿ ಆತನನ್ನು ಆರಾಧಿಸು
ವೆನು’’ ಎಂದು ಹೇಳಿ ಅವರನ್ನು ಬೆತ್ಲೆಹೇಮಿಗೆ ಕಳುಹಿಸಿ
ಕೊಟ್ಟನು. 9ಆ ಜ್ಞಾನಿಗಳು ಅರಸನ ಮಾತನ್ನು ಕೇಳಿ ಅಲ್ಲಿಂದ
ಹೊರಟಾಗ, ಪೂರ್ವದಿಕ್ಕಿನಲ್ಲಿ ಉದಯಿಸಿದ್ದ ನಕ್ಷತ್ರವನ್ನು ಮತ್ತೆ
ಕಂಡರು. ಅವರು ಆ ನಕ್ಷತ್ರವನ್ನೇ ಹಿಂಬಾಲಿಸಿದರು. ಆ ನಕ್ಷತ್ರ
ಅವರ ಮುಂದೆ ಚಲಿಸುತ್ತಾ ಹೋಗಿ ಮಗುವಿದ್ದ ಸ್ಥಳದ ಮೇಲೆ
ನಿಂತುಕೊಂಡಿತು. 10ಅವರು ಆ ನಕ್ಷತ್ರವನ್ನು ನೋಡಿ ಅತ್ಯಂತ
ಸಂತೋಷಪಟ್ಟರು. 11ಅವರು ಆ ಮನೆಗೆ ಬಂದಾಗ, ಮಗು
ವನ್ನು ತಾಯಿ ಮರಿಯಳ ಬಳಿ ಕಂಡು, ಅದಕ್ಕೆ ಸಾಷ್ಟಾಂಗವೆರಗಿ
ಆರಾಧಿಸಿದರು. ಅಲ್ಲದೆ ತಾವು ಮಗುವಿಗಾಗಿ ತಂದಿದ್ದ ಕಾಣಿಕೆ
ಗಳನ್ನು ತೆರೆದು ಚಿನ್ನ, ಧೂಪ ಮತ್ತು ಸುಗಂಧ ದ್ರವ್ಯಗಳನ್ನು
ನೀಡಿದರು. 12ಆದರೆ ದೇವರು ಜ್ಞಾನಿಗಳಿಗೆ ಕನಸಿನಲ್ಲಿ, ‘‘ನೀವು
ಹೆರೋದನ ಬಳಿಗೆ ಹಿಂತಿರುಗಿ ಹೋಗಕೂಡದು’’ ಎಂದು
ಎಚ್ಚರಿಸಿದನು. ಆದ್ದರಿಂದ ಅವರು ಬೇರೊಂದು ಮಾರ್ಗದ
ಮೂಲಕ ತಮ್ಮ ದೇಶಕ್ಕೆ ಹೊರಟುಹೋದರು.

### ಯೇಸುವಿನೊಡನೆ ಈಜಿಪ್ಟಿಗೆ ಪಲಾಯನ

13ಜ್ಞಾನಿಗಳು ಹೊರಟುಹೋದ ನಂತರ ಪ್ರಭುವಿನ
ದೂತನು ಯೋಸೇಫನಿಗೆ ಕನಸಿನಲ್ಲಿ ಕಾಣಿಸಿಕೊಂಡು,
‘‘ಎದ್ದೇಳು! ಮಗುವನ್ನು ಮತ್ತು ಅದರ ತಾಯಿಯನ್ನು ಕರೆದು
ಕೊಂಡು ಈಜಿಪ್ಟಿಗೆ ಓಡಿಹೋಗು. ಹೆರೋದನು ಮಗುವನ್ನು
ಹುಡುಕಲು ಪ್ರಾರಂಭಿಸುವನು. ಅವನು ಮಗುವನ್ನು ಕೊಲ್ಲ
ಬೇಕೆಂದಿದ್ದಾನೆ. ‘ಅಪಾಯವಿಲ್ಲ’ ಎಂದು ನಾನು ನಿನಗೆ ಹೇಳುವ
ತನಕ ನೀನು ಈಜಿಪ್ಟಿನಲ್ಲೇ ಇರು’’ ಎಂದು ಹೇಳಿದನು.

14ಕೂಡಲೇ, ಯೋಸೇಫನು ಎದ್ದು ಮಗು ಮತ್ತು ಅದರ
ತಾಯಿಯೊಂದಿಗೆ ಈಜಿಪ್ಟಿಗೆ ರಾತ್ರಿ ಸಮಯದಲ್ಲಿ ಹೊರಟು

---

**ದಾವೀದನ ಮಗನು** ದಾವೀದನ ವಂಶದವನು. ದಾವೀದನು ಇಸ್ರೇಲಿನ ಎರಡನೆ ರಾಜ. ಕ್ರಿಸ್ತನು ಹುಟ್ಟುವುದಕ್ಕಿಂತ ಒಂದು ಸಾವಿರ ವರ್ಷಗಳ ಹಿಂದೆ ಇವನು ರಾಜನಾಗಿದ್ದನು.

**ಕನ್ನಿಕೆಯೊಬ್ಬಳು … ಇಡುವರು** ಯೆಶಾಯ 7:4

**ಪವಿತ್ರ ಗ್ರಂಥ** ಪವಿತ್ರ ಬರಹಗಳು – ಹಳೆ ಒಡಂಬಡಿಕೆ.

ಹೋದನು. [15]ಹೆರೋದನು ಸಾಯುವ ತನಕ ಯೋಸೇಫನು
ಈಜಿಪ್ಟಿನಲ್ಲೇ ಇದ್ದನು. ‘‘ನಾನು ನನ್ನ ಮಗನನ್ನು ಈಜಿಪ್ಟಿ
ನೊಳಗಿಂದ ಕರೆದೆ’’* ಎಂದು ಪ್ರವಾದಿಯ ಮೂಲಕ ಪ್ರಭು
ಹೇಳಿದ್ದ ಮಾತು ಇದರಿಂದ ನೆರವೇರಿತು.

### ಬೆತ್ಲೆಹೇಮಿನಲ್ಲಿ ಗಂಡುಮಕ್ಕಳ ಸಂಹಾರ

[16]ಜ್ಞಾನಿಗಳು ತನಗೆ ಮೋಸಮಾಡಿದರೆಂಬುದು ತಿಳಿದಾಗ
ಹೆರೋದನು ಬಹಳ ಕೋಪಗೊಂಡನು. ಆ ಮಗು ಹುಟ್ಟಿದ
ಸಮಯವನ್ನು ಹೆರೋದನು ಜ್ಞಾನಿಗಳಿಂದ ತಿಳಿದುಕೊಂಡಿ
ದ್ದನು. ಆ ಮಗು ಹುಟ್ಟಿ ಎರಡು ವರ್ಷಗಳಾಗಿದ್ದವು. ಆದ್ದರಿಂದ
ಹೆರೋದನು ಬೆತ್ಲೆಹೇಮಿನಲ್ಲಿ ಮತ್ತು ಅದರ ಸುತ್ತಮುತ್ತಲಿನ
ಪ್ರದೇಶಗಳಲ್ಲಿದ್ದ ಎರಡು ವರ್ಷದ ಮತ್ತು ಅವರಿಗಿಂತ ಚಿಕ್ಕವ
ರಾದ ಗಂಡುಮಕ್ಕಳನ್ನೆಲ್ಲಾ ಕೊಲ್ಲಬೇಕೆಂದು ಆಜ್ಞಾಪಿಸಿದನು.
[17]ಹೀಗೆ ದೇವರು ತನ್ನ ಪ್ರವಾದಿಯಾದ ಯೆರೆಮೀಯನ
ಮೂಲಕ ಹೇಳಿದ ಈ ಮಾತು ನೆರವೇರಿತು:

> [18] ‘‘ರಾಮದಲ್ಲಿ ಬೊಬ್ಬೆಯು ಕೇಳಿಸಿತು. ಅದು ಬಹು
> ಗೋಳಾಟದ ಮತ್ತು ದುಃಖದ ಬೊಬ್ಬೆ
> ಯಾಗಿತ್ತು. ರಾಹೇಲಳು ತನ್ನ ಮಕ್ಕಳಿಗಾಗಿ ಅಳು
> ವಳು; ಅವರು ಸತ್ತುಹೋದದ್ದಕ್ಕಾಗಿ ಸಮಾಧಾನ
> ಹೊಂದಲೊಲ್ಲಳು.’’ *ಯೆರೆಮೀಯ 31:15*

### ಯೋಸೇಫ ಮರಿಯಳ ಮರುಪ್ರಯಾಣ

[19]ಹೆರೋದನು ಸತ್ತನಂತರ, ಪ್ರಭುವಿನ ದೂತನು
ಯೋಸೇಫನಿಗೆ ಕನಸಿನಲ್ಲಿ ಕಾಣಿಸಿಕೊಂಡನು. ಯೋಸೇಫನು
ಈಜಿಪ್ಟಿನಲ್ಲಿ ಇರುವಾಗಲೇ ಇದು ಸಂಭವಿಸಿತು. [20]ದೇವ
ದೂತನು ಅವನಿಗೆ, ‘‘ಎದ್ದೇಳು! ಮಗುವನ್ನು ಮತ್ತು ಅದರ
ತಾಯಿಯನ್ನು ಕರೆದುಕೊಂಡು ಇಸ್ರೇಲಿಗೆ ಹೋಗು. ಮಗು
ವನ್ನು ಕೊಲ್ಲಲು ಪ್ರಯತ್ನಿಸುತ್ತಿದ್ದವರು ಸತ್ತುಹೋದರು’’
ಎಂದು ಹೇಳಿದನು.
[21]ಆದ್ದರಿಂದ ಯೋಸೇಫನು ಮಗುವನ್ನು ಮತ್ತು ಮಗುವಿನ
ತಾಯಿಯನ್ನು ಕರೆದುಕೊಂಡು ಇಸ್ರೇಲಿಗೆ ಹೋದನು.
[22]ಆದರೆ ಹೆರೋದನು ಸತ್ತನಂತರ ಅವನ ಮಗನಾದ
ಅರ್ಖೆಲಾಯನು ಜುದೇಯದ ರಾಜನಾಗಿದ್ದಾನೆ ಎಂಬುದನ್ನು
ಕೇಳಿ ಅಲ್ಲಿಗೆ ಹೋಗಲು ಭಯಪಟ್ಟನು. ಕನಸಿನಲ್ಲಿ ತನಗೆ
ಕೊಟ್ಟ ಎಚ್ಚರಿಕೆಯಂತೆ ಅವನು ಆ ಸ್ಥಳವನ್ನು ಬಿಟ್ಟು ಗಲಿಲಾಯ
ಪ್ರದೇಶಕ್ಕೆ ಹೋಗಿ, [23]ನಜರೇತ್ ಎಂಬ ಊರಲ್ಲಿ ವಾಸಿಸಿದನು.
‘‘ಕ್ರಿಸ್ತನನ್ನು ‘ನಜರೇತಿನವನು’* ಎಂದು ಕರೆಯುತ್ತಾರೆ’’
ಎಂದು ದೇವರು ಪ್ರವಾದಿಗಳ ಮೂಲಕ ಹೇಳಿದ್ದು ಹೀಗೆ
ನೆರವೇರಿತು.

---

**ನಾನು … ಕರೆದೆ** ಹೊಶೇಯ 11:1

**‘ನಜರೇತಿನವನು’** ಇದಕ್ಕೆ ಸಮರ್ಪಕವಾದ ಹಳೆ ಒಡಂಬಡಿಕೆಯ ವಚನ ತಿಳಿಯದು. ಒಂದು ವೇಳೆ ‘‘ನಾಜೀರ’’ ಎನಿಸಿಕೊಂಡಿದ್ದ ಅಂದರೆ ದೇವರಿಗೆ ‘‘ಅಭಿಷೇಕಿಸಲ್ಪಟ್ಟಿದ್ದ ಸಂಸೋನನೊಡನೆ ಯೇಸುವನ್ನು ‘‘ನಜರೇತಿನವನು’‘ ಎಂದು ಹೋಲಿಸಿದ್ದಿರಬಹುದು. ನ್ಯಾಯಸ್ಥಾಪಕರು 13:5,7

### ಸ್ನಾನಿಕ ಯೋಹಾನನ ಉಪದೇಶ

*(ಮಾರ್ಕ 1:1-8; ಲೂಕ 3:1-9, 15-17; ಯೋಹಾನ 1:19-28)*

3 ಆ ಕಾಲದಲ್ಲಿ ಸ್ನಾನಿಕ ಯೋಹಾನನು ಜುದೇಯದ
ಅಡವಿಯಲ್ಲಿ ಬೋಧಿಸುವುದಕ್ಕೆ ಪ್ರಾರಂಭಿಸಿದನು.
[2]‘‘ಪರಲೋಕರಾಜ್ಯವು ಸಮೀಪಿಸಿತು. ನೀವು ನಿಮ್ಮ
ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿ
ಕೊಳ್ಳಿರಿ’’ ಎಂದು ಅವನು ಬೋಧಿಸಿದನು.

> [3] ‘ಪ್ರಭುವಿಗಾಗಿ ಮಾರ್ಗವನ್ನು ಸಿದ್ಧಮಾಡಿರಿ; ಆತನ
> ಹಾದಿಗಳನ್ನು ನೆಟ್ಟಗೆಮಾಡಿರಿ’ ಎಂದು ಅಡವಿ
> ಯಲ್ಲಿ ಒಬ್ಬನು ಕೂಗುತ್ತಿದ್ದಾನೆ’’
> *ಯೆಶಾಯ 40:3*

ಎಂದು ಸ್ನಾನಿಕ ಯೋಹಾನನನ್ನೇ ಕುರಿತು ಪ್ರವಾದಿಯಾದ
ಯೆಶಾಯ ಹೇಳಿದ್ದನು.
[4]ಯೋಹಾನನ ಉಡುಪುಗಳು ಒಂಟೆಯ ಕೂದಲಿನಿಂದ
ಮಾಡಲ್ಪಟ್ಟಿದ್ದವು. ಅವನಿಗೆ ಸೊಂಟದಲ್ಲಿ ತೊಗಲಿನ ನಡುಪಟ್ಟಿ
ಇತ್ತು. ಅವನು ಮಿಡತೆ ಮತ್ತು ಕಾಡುಜೇನನ್ನು ಆಹಾರವಾಗಿ
ತಿನ್ನುತ್ತಿದ್ದನು. [5]ಜನರು ಯೋಹಾನನ ಉಪದೇಶವನ್ನು ಕೇಳಲು
ಜೆರುಸಲೇಮಿನಿಂದಲೂ ಜುದೇಯ ಮತ್ತು ಜೋರ್ಡನ್
ನದಿಯ ಸುತ್ತಲಿದ್ದ ಎಲ್ಲಾ ಸ್ಥಳದಿಂದಲೂ ಬರುತ್ತಿದ್ದರು.
[6]ಜನರು ತಾವು ಮಾಡಿದ ಪಾಪಗಳನ್ನು ಒಪ್ಪಿಕೊಂಡ ಮೇಲೆ
ಯೋಹಾನನು ಅವರಿಗೆ ಜೋರ್ಡನ್ ನದಿಯಲ್ಲಿ ದೀಕ್ಷಾಸ್ನಾನ
ಕೊಡುತ್ತಿದ್ದನು. [7]ಅನೇಕ ಫರಿಸಾಯರು ಮತ್ತು ಸದ್ದುಕಾಯರು
ಯೋಹಾನನಿಂದ ದೀಕ್ಷಾಸ್ನಾನ ಮಾಡಿಸಿಕೊಳ್ಳಲು ಬಂದರು.
ಯೋಹಾನನು ಅವರನ್ನು ನೋಡಿ, ‘‘ನೀವೆಲ್ಲರು ಸರ್ಪಗಳು!
ಬರಲಿರುವ ದೇವರ ಕೋಪದಿಂದ ತಪ್ಪಿಸಿಕೊಳ್ಳಲು ನಿಮಗೆ
ಎಚ್ಚರಿಸಿದವರು ಯಾರು? [8]ನಿಮ್ಮ ಮನಸ್ಸು ನಿಜವಾಗಿಯೂ
ದೇವರ ಕಡೆಗೆ ತಿರುಗಿಕೊಂಡಿದೆ ಎಂಬುದನ್ನು ನೀವು ತಕ್ಕ
ಕಾರ್ಯಗಳ ಮೂಲಕ ತೋರಿಸಿ.
[9]‘ಅಬ್ರಹಾಮನು ನಮ್ಮ ತಂದೆ’ ಎಂದು ನೀವು ಜಂಬ
ಪಡುವುದೇಕೆ? ದೇವರು ಅಬ್ರಹಾಮನಿಗಾಗಿ ಇಲ್ಲಿರುವ ಬಂಡೆ
ಗಳಿಂದಲೂ ಮಕ್ಕಳನ್ನು ಸೃಷ್ಟಿಸಬಲ್ಲನು ಎಂದು ನಾನು ನಿಮಗೆ
ಹೇಳುತ್ತೇನೆ.
[10]ಮರಗಳನ್ನು* ಕಡಿದುಹಾಕಲು ಕೊಡಲಿ ಈಗಲೇ ಸಿದ್ಧ
ವಾಗಿದೆ. ಒಳ್ಳೆಯ ಫಲಬಿಡದ ಪ್ರತಿಯೊಂದು ಮರವನ್ನು ಕಡಿದು
ಬೆಂಕಿಗೆ ಹಾಕಲಾಗುವುದು.
[11]‘‘ನಿಮ್ಮ ಮನಸ್ಸು ದೇವರ ಕಡೆಗೆ ತಿರುಗಿಕೊಂಡಿದೆ
ಎಂಬುದಕ್ಕೆ ಗುರುತಾಗಿ ನಾನು ನಿಮಗೆ ನೀರಿನಲ್ಲಿ ದೀಕ್ಷಾಸ್ನಾನ
ಮಾಡಿಸುವೆನು. ಆದರೆ ನನ್ನ ಹಿಂದೆ ಬರುವವನು ನನಗಿಂತ ಹೆಚ್ಚಿ
ನವನು. ಆತನ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು
ಯೋಗ್ಯನಲ್ಲ. ಆತನು ನಿಮಗೆ ಪವಿತ್ರಾತ್ಮನಲ್ಲಿಯೂ ಬೆಂಕಿ
ಯಲ್ಲಿಯೂ ದೀಕ್ಷಾಸ್ನಾನ ಮಾಡಿಸುವನು. [12]ಆತನು ಕಾಳನ್ನು
ಸ್ವಚ್ಛಗೊಳಿಸಲು ಸಿದ್ಧನಾಗಿದ್ದಾನೆ. ಆತನು ಕಾಳನ್ನು ಹೊಟ್ಟಿನಿಂದ
ಬೇರ್ಪಡಿಸಿ ಒಳ್ಳೆಯ ಕಾಳುಗಳನ್ನು ಕಣಜದಲ್ಲಿ ತುಂಬಿಸಿ

---

**ಮರಗಳು** ಯೇಸುವನ್ನು ಒಪ್ಪಿಕೊಳ್ಳದಿರುವ ಜನರು. ಅವರು ಕಡಿದುರುಳಿಸುವ ‘ಮರ’‘ಗಳಂತಿದ್ದಾರೆ.

ಹೊಟ್ಟನ್ನು ನಂದಿಸಲಾಗದ ಬೆಂಕಿಯಲ್ಲಿ ಸುಟ್ಟುಹಾಕುವನು''
ಎಂದನು.

## ಯೋಹಾನನಿಂದ ಯೇಸುವಿಗೆ ದೀಕ್ಷಾಸ್ನಾನ

(ಮಾರ್ಕ 1:9-11; ಲೂಕ 3:21-22)

13 ಆ ಸಮಯದಲ್ಲಿ ಯೋಹಾನನಿಂದ ಯೇಸು ದೀಕ್ಷಾಸ್ನಾನ
ಮಾಡಿಸಿಕೊಳ್ಳಲು ಗಲಿಲೇಯದಿಂದ ಜೋರ್ಡನ್ ನದಿಗೆ
ಬಂದನು.
14 ಆದರೆ ಯೋಹಾನನು, ''ನಾನೇ ನಿನ್ನಿಂದ ದೀಕ್ಷಾಸ್ನಾನ
ಮಾಡಿಸಿಕೊಳ್ಳಬೇಕಾಗಿದೆ. ಹೀಗಿರಲು ನನ್ನಿಂದ ದೀಕ್ಷಾ ಸ್ನಾನ
ಮಾಡಿಸಿಕೊಳ್ಳಲು ನೀನು ಬರುವುದೇಕೆ?'' ಎಂದು ಹೇಳಿ
ಆತನನ್ನು ತಡೆಯಲೆತ್ನಿಸಿದನು.
15 ಯೇಸು, ''ಸದ್ಯಕ್ಕೆ ಒಪ್ಪಿಕೊ. ನಾವು ಯೋಗ್ಯವಾದ
ಕಾರ್ಯಗಳನ್ನೆಲ್ಲ ಮಾಡಬೇಕು'' ಎಂದು ಉತ್ತರ ಕೊಟ್ಟನು.
ಆಗ ಯೋಹಾನನು ಯೇಸುವಿಗೆ ದೀಕ್ಷಾಸ್ನಾನ ಮಾಡಿಸಲು
ಒಪ್ಪಿಕೊಂಡನು.
16 ಯೇಸು ದೀಕ್ಷಾಸ್ನಾನ ಮಾಡಿಸಿಕೊಂಡು ನೀರಿನಿಂದ
ಮೇಲಕ್ಕೆ ಬಂದನು. ಕೂಡಲೇ ಆಕಾಶವು ತೆರೆಯಿತು. ದೇವ
ರಾತ್ಮನು ಪಾರಿವಾಳದ ರೂಪದಲ್ಲಿ ಕೆಳಗಿಳಿದು ತನ್ನ ಮೇಲೆ
ಬರುತ್ತಿರುವುದನ್ನು ಯೇಸು ಕಂಡನು. 17 ಆಗ ಪರಲೋಕದಿಂದ
ಧ್ವನಿಯೊಂದು ಹೊರಟು, ''ಈತನೇ (ಯೇಸು) ನನ್ನ ಪ್ರಿಯ
ಮಗನು. ಈತನನ್ನು ನಾನು ಬಹಳ ಮೆಚ್ಚಿದ್ದೇನೆ ''ಎಂದು
ಹೇಳಿತು.

## ಯೇಸುವಿಗಾದ ಶೋಧನೆ

(ಮಾರ್ಕ 1:12-13; ಲೂಕ 4:1-13)

4 ಆಗ ದೇವರಾತ್ಮನು ಸೈತಾನನಿಂದ ಶೋಧಿಸಲ್ಪಡಲು
ಯೇಸುವನ್ನು ಅಡವಿಗೆ ನಡೆಸಿದನು. 2 ಯೇಸು ನಲವತ್ತು
ದಿನ ಹಗಲಿರುಳು ಏನನ್ನೂ ತಿನ್ನಲಿಲ್ಲ. ಬಳಿಕ ಆತನಿಗೆ ಬಹಳ
ಹಸಿವಾಯಿತು.
3 ಆಗ ಆತನನ್ನು ಶೋಧಿಸಲು ಸೈತಾನನು ಬಂದು, ''ನೀನು
ದೇವರ ಮಗನಾಗಿದ್ದರೆ ಈ ಕಲ್ಲುಗಳು ರೊಟ್ಟಿಗಳಾಗಲೆಂದು
ಆಜ್ಞಾಪಿಸು'' ಅಂದನು.

4 ಯೇಸು ಅವನಿಗೆ,

'''ಮನುಷ್ಯನು ಬದುಕುವುದು ಕೇವಲ ರೊಟ್ಟಿ
ಯಿಂದಲ್ಲ, ದೇವರು ಹೇಳುವ ಪ್ರತಿಯೊಂದು
ಮಾತನ್ನು ಅವಲಂಬಿಸಿಕೊಂಡಿದೆ'

*ಧರ್ಮೋಪದೇಶಕಾಂಡ 8:3*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ'' ಎಂಬುದಾಗಿ ಉತ್ತರ
ಕೊಟ್ಟನು.
5 ಆಗ ಸೈತಾನನು ಯೇಸುವನ್ನು ಪರಿಶುದ್ಧ ಪಟ್ಟಣವಾದ
ಜೆರುಸಲೇಮಿಗೆ ಕರೆದುಕೊಂಡು ಹೋಗಿ, ದೇವಾಲಯದ ಅತಿ
ಎತ್ತರವಾದ ಸ್ಥಳದಲ್ಲಿ ನಿಲ್ಲಿಸಿ, 6 ''ನೀನು ದೇವರ ಮಗನಾಗಿದ್ದರೆ,
ಕೆಳಕ್ಕೆ ದುಮುಕು.

'ದೇವರು ನಿನಗೋಸ್ಕರ ತನ್ನ ದೂತರಿಗೆ ಆಜ್ಞಾಪಿಸು
ವನು. ನಿನ್ನ ಪಾದಗಳು ಬಂಡೆಗೆ ಅಪ್ಪಳಿಸದಂತೆ
ಅವರು ನಿನ್ನನ್ನು ಕೈಗಳಲ್ಲಿ ಎತ್ತಿಕೊಳ್ಳುವರು'

*ಕೀರ್ತನೆ 91:11-12*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆಯಲ್ಲ'' ಎಂದನು.
7 ಅದಕ್ಕೆ ಯೇಸು,

''ನಿನ್ನ ದೇವರಾದ ಪ್ರಭುವನ್ನು ನೀನು ಪರೀಕ್ಷಿಸ
ಕೂಡದು.''

*ಧರ್ಮೋಪದೇಶಕಾಂಡ 6:16*

ಎಂಬುದಾಗಿಯೂ ಪವಿತ್ರ ಗ್ರಂಥದಲ್ಲಿ ಬರೆದಿದೆ'' ಎಂದು
ಉತ್ತರ ಕೊಟ್ಟನು.
8 ಬಳಿಕ ಸೈತಾನನು ಯೇಸುವನ್ನು ಎತ್ತರವಾದ ಬೆಟ್ಟದ ತುದಿಗೆ
ಕರೆದುಕೊಂಡು ಹೋಗಿ ಲೋಕದ ಎಲ್ಲಾ ರಾಜ್ಯಗಳನ್ನು ಮತ್ತು
ಅವುಗಳ ವೈಭವವನ್ನು ತೋರಿಸಿದನು. 9 ಸೈತಾನನು ಆತನಿಗೆ,
''ನೀನು ನನಗೆ ಅಡ್ಡಬಿದ್ದು ಆರಾಧಿಸಿದರೆ ನಾನು ಅವೆಲ್ಲವನ್ನು
ನಿನಗೆ ಕೊಡುತ್ತೇನೆ ಎಂದು ಹೇಳಿದನು.
10 ಯೇಸು ಸೈತಾನನಿಗೆ,

''ಇಲ್ಲಿಂದ ತೊಲಗು! 'ನಿನ್ನ ದೇವರಾದ ಪ್ರಭು
ವನ್ನೇ ಆರಾಧಿಸಬೇಕು, ಆತನೊಬ್ಬನನ್ನೇ ಸೇವಿಸ
ಬೇಕು'

*ಧರ್ಮೋಪದೇಶಕಾಂಡ 6:13*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ'' ಎಂದು ಹೇಳಿದನು.
11 ಆದ್ದರಿಂದ ಸೈತಾನನು ಯೇಸುವನ್ನು ಬಿಟ್ಟು ಹೋದನು.
ಆಗ ಕೆಲವು ದೇವದೂತರು ಬಂದು ಆತನನ್ನು ಉಪಚರಿಸಿದರು.

## ಗಲಿಲಾಯದಲ್ಲಿ ಯೇಸುವಿನ ಸುವಾರ್ತಾ ಸೇವೆಯ ಆರಂಭ

(ಮಾರ್ಕ 1:14-15; ಲೂಕ 4:14-15)

12 ಯೋಹಾನನನ್ನು ಸೆರೆಯಲ್ಲಿಟ್ಟಿದ್ದಾರೆಂಬುದು ಯೇಸು
ವಿಗೆ ತಿಳಿಯಿತು. ಆದ್ದರಿಂದ ಯೇಸು ಗಲಿಲಾಯಕ್ಕೆ ಹಿಂತಿರುಗಿ
ಹೋದನು. 13 ಆತನು ನಜರೇತಿನಲ್ಲಿ ಇಳಿದುಕೊಳ್ಳದೆ
ಹೊರಟುಹೋಗಿ ಗಲಿಲಾಯ ಸರೋವರಕ್ಕೆ ಹತ್ತಿರವಿದ್ದ
ಕಪೆರ್ನೌಮ್ ಎಂಬ ಊರಲ್ಲಿ ವಾಸಿಸಿದನು. ಈ ಊರು
ಜೆಬುಲೋನ್ ಮತ್ತು ನಫ್ತಾಲಿ ಸೀಮೆಗಳ ಬಳಿಯಲ್ಲಿದೆ.
14 ಪ್ರವಾದಿಯಾದ ಯೆಶಾಯನು ನುಡಿದಿದ್ದ ಮಾತು ಹೀಗೆ
ನೆರವೇರಿತು. ಅದೇನೆಂದರೆ:

15 ''ಜೆಬುಲೋನ್ ಸೀಮೆಯ, ನಫ್ತಾಲಿ ಸೀಮೆಯ,
ಜೋರ್ಡನ್ನಿನ ಆಚೆ ಸೀಮೆಯ, ಸಮುದ್ರದ
ಕಡೆಗಿರುವ ಸೀಮೆಯ, ಯೆಹೂದ್ಯರಲ್ಲದ
ಗಲಿಲಾಯ ಸೀಮೆಯ
16 ಜನರು ಕತ್ತಲಲ್ಲಿ ಜೀವಿಸುತ್ತಿದ್ದರು. ಆಗ ಅವರಿಗೆ
ದೊಡ್ಡ ಬೆಳಕೊಂದು ಕಾಣಿಸಿತು. ಸಮಾಧಿ

ಯಂತಿರುವ ಕಾರ್ಗತ್ತಲೆಯ ದೇಶದಲ್ಲಿ
ವಾಸಿಸುವ ಆ ಜನರಿಗೆ ಬೆಳಕು ದೊರೆಯಿತು.''
*ಯೆಶಾಯ 9:1-2*

### ಯೇಸುವಿನ ಪ್ರಥಮ ಶಿಷ್ಯರು
(ಮಾರ್ಕ 1:16-20; ಲೂಕ 5:1-11)

17ಅಂದಿನಿಂದ ಬೋಧಿಸುವುದಕ್ಕೆ ಯೇಸು ಪ್ರಾರಂಭಿ
ಸಿದನು. ''ಪರಲೋಕ ರಾಜ್ಯವು ಬೇಗನೆ ಬರಲಿದೆ. ಆದ್ದರಿಂದ
ನೀವು ನಿಮ್ಮ ಹೃದಯಗಳನ್ನು ಮತ್ತು ಜೀವಿತಗಳನ್ನು
ಮಾರ್ಪಡಿಸಿಕೊಳ್ಳಿರಿ'' ಎಂದು ಯೇಸು ಬೋಧಿಸಿದನು.
18ಗಲಿಲಾಯ ಸರೋವರದ ತೀರದಲ್ಲಿ ಯೇಸು ತಿರು
ಗಾಡುತ್ತಾ ಇದ್ದನು. ಆತನು ಸೀಮೋನ (ಈತನನ್ನೇ ಪೇತ್ರ
ಎಂದು ಕರೆಯಲಾಯಿತು.) ಮತ್ತು ಸಿಮೋನನ ಸಹೋದರ
ನಾದ ಅಂದ್ರೆಯ ಎಂಬ ಇಬ್ಬರು ಸಹೋದರರನ್ನು ಕಂಡನು.
ಬೆಸ್ತರಾಗಿದ್ದ ಇವರಿಬ್ಬರು ಅಂದು ಸರೋವರದ ತೀರದಲ್ಲಿ
ಬಲೆಹಾಕಿ ಮೀನು ಹಿಡಿಯುತ್ತಿದ್ದರು. 19ಯೇಸು, ''ಬನ್ನಿರಿ,
ನನ್ನನ್ನು ಹಿಂಬಾಲಿಸಿ. ನಿಮ್ಮನ್ನು ಬೇರೆ ತರದ ಬೆಸ್ತರನ್ನಾಗಿ
ಮಾಡುವೆನು. ನೀವು ಒಟ್ಟುಗೂಡಿಸುವುದು ಮೀನನಲ್ಲ,
ಮನುಷ್ಯರನ್ನು'' ಎಂದನು. 20ಕೂಡಲೇ ಸೀಮೋನ ಮತ್ತು
ಅಂದ್ರೆಯ ತಮ್ಮ ಬಲೆಗಳನ್ನು ಬಿಟ್ಟು ಆತನನ್ನು ಹಿಂಬಾ
ಲಿಸಿದರು.
21ಯೇಸು ಗಲಿಲಾಯ ಸರೋವರದ ತೀರದಲ್ಲಿ ನಡೆದು
ಕೊಂಡು ಹೋಗುತ್ತಿದ್ದಾಗ ಜೆಬೆದಾಯನ ಮಕ್ಕಳಾದ
ಯಾಕೋಬ ಮತ್ತು ಯೋಹಾನರೆಂಬ ಇಬ್ಬರು ಸಹೋದರ
ರನ್ನು ನೋಡಿದನು. ಅವರು ತಮ್ಮ ತಂದೆಯಾದ ಜೆಬೆದಾಯನ
ಸಂಗಡ ದೋಣಿಯಲ್ಲಿದ್ದರು. ಅವರು ಮೀನು ಹಿಡಿಯಲು
ತಮ್ಮ ಬಲೆಗಳನ್ನು ಸರಿಪಡಿಸಿಕೊಳ್ಳುತ್ತಿದ್ದರು. ಯೇಸು ಇವರನ್ನು
ಕರೆದನು. 22ಆಗ ಅವರು ದೋಣಿಯನ್ನು ಮತ್ತು ತಮ್ಮ ತಂದೆ
ಯನ್ನು ಬಿಟ್ಟು ಯೇಸುವನ್ನು ಹಿಂಬಾಲಿಸಿದರು.

### ಯೇಸುವಿನ ಉಪದೇಶ ಮತ್ತು ರೋಗಿಗಳಿಗೆ ಸ್ವಸ್ಥತೆ.
(ಲೂಕ 6:17-19)

23ಯೇಸು ಗಲಿಲಾಯ ಪ್ರಾಂತ್ಯದಲ್ಲೆಲ್ಲಾ ಸಂಚರಿಸಿ
ದನು. ಯೇಸು ಸಭಾಮಂದಿರಗಳಲ್ಲಿ ಭೋಧಿಸಿದನು ಮತ್ತು
ಪರಲೋಕರಾಜ್ಯದ ವಿಷಯವಾದ ಶುಭವಾರ್ತೆಯನ್ನು ಉಪ
ದೇಶಿಸಿದನು. ಯೇಸು ಎಲ್ಲಾ ಜನರ ಕಾಯಿಲೆಗಳನ್ನು ಮತ್ತು
ರೋಗಗಳನ್ನು ವಾಸಿಮಾಡಿದನು. 24ಯೇಸುವಿನ ವಿಷಯವಾದ
ಸುದ್ದಿಯು ಸಿರಿಯ ದೇಶದಲ್ಲೆಲ್ಲಾ ಹರಡಿತು. ಜನರು ಕಾಯಿಲೆ
ಯವರನ್ನೆಲ್ಲ ಯೇಸುವಿನ ಬಳಿಗೆ ತಂದರು. ಅವರು ನಾನಾ
ವಿಧವಾದ ವ್ಯಾಧಿಗಳಿಂದ ಮತ್ತು ನೋವಿನಿಂದ ಬಾಧೆಪಡು
ತ್ತಿದ್ದರು. ಕೆಲವರು ತೀವ್ರವಾದ ನೋವಿನಿಂದ ನರಳುತ್ತಿದ್ದರು.
ಕೆಲವರು ದೆವ್ವಗಳಿಂದ ಪೀಡಿತರಾಗಿದ್ದರು. ಕೆಲವರು
ಮೂರ್ಛಾರೋಗಿಗಳಾಗಿದ್ದರು. ಕೆಲವರು ಪಾರ್ಶ್ವವಾಯು
ರೋಗಿಗಳಾಗಿದ್ದರು. ಯೇಸು ಇವರನ್ನೆಲ್ಲಾ ಗುಣಪಡಿಸಿದನು.
25ಅನೇಕಾನೇಕ ಜನರು ಯೇಸುವನ್ನು ಹಿಂಬಾಲಿಸಿದರು. ಈ
ಜನರು ಗಲಿಲಾಯದಿಂದಲೂ ದೆಕಪೊಲಿ ಎಂಬ ಹತ್ತು
ಊರುಗಳಿಂದಲೂ ಜೆರುಸಲೇಮಿನಿಂದಲೂ ಜುದೇಯ
ದಿಂದಲೂ ಮತ್ತು ಜೋರ್ಡನ್ ನದಿಯ ಆಚೆಕಡೆಯ ಪ್ರದೇಶ
ದಿಂದಲೂ ಬಂದಿದ್ದರು.

### ಪರ್ವತ ಪ್ರಸಂಗ
(ಲೂಕ 6:20-23)

5 ಯೇಸು ಈ ಜನಸಮೂಹವನ್ನು ನೋಡಿ, ಬೆಟ್ಟದ ಮೇಲೆ
ಹೋಗಿ ಕುಳಿತುಕೊಂಡನು. ಆತನ ಶಿಷ್ಯರು ಸಹ ಆತನ
ಬಳಿಗೆ ಬಂದರು. 2ಆಗ ಯೇಸು ಜನರಿಗೆ ಈ ಉಪದೇಶ
ಮಾಡಿದನು:

3 ''ಆತ್ಮೀಕತೆಯಲ್ಲಿ ಬಡವರಾಗಿರುವವರು ಧನ್ಯರು.
ಪರಲೋಕರಾಜ್ಯ ಅವರದು.
4 ಈಗ ದುಃಖದಿಂದಿರುವವರು ಧನ್ಯರು. ದೇವರು
ಅವರನ್ನು ಸಂತೈಸುವನು.
5 ದೀನರು ಧನ್ಯರು. ದೇವರು ವಾಗ್ದಾನ ಮಾಡಿದ
ಭೂಮಿಯನ್ನು ಅವರು ಹೊಂದಿ
ಕೊಳ್ಳುವರು.*
6 ನೀತಿಗಾಗಿ ತವಕಪಡುವವರು ಧನ್ಯರು. ದೇವರು
ಅವರನ್ನು ಸಂತೃಪ್ತಿಪಡಿಸುವನು.
7 ಕರುಣೆ ತೋರುವವರು ಧನ್ಯರು. ಅವರೂ
ಕರುಣೆ ಹೊಂದುವರು.
8 ಪರಿಶುದ್ಧ ಹೃದಯವುಳ್ಳವರು ಧನ್ಯರು. ಅವರು
ದೇವರನ್ನು ನೋಡುವರು.
9 ಸಮಾಧಾನಪಡಿಸುವವರು ಧನ್ಯರು. ಅವರು
'ದೇವರ ಮಕ್ಕಳು' ಎನಿಸಿಕೊಳ್ಳುವರು.
10 ನೀತಿಯ ನಿಮಿತ್ತ ಹಿಂಸೆಪಡುವವರು ಧನ್ಯರು
ಪರಲೋಕರಾಜ್ಯ ಅವರದು.

11''ನೀವು ನನ್ನನ್ನು ಹಿಂಬಾಲಿಸುವುದರಿಂದ ಜನರು ನಿಮ್ಮನ್ನು
ಅಪಹಾಸ್ಯ ಮಾಡಿದರೆ, ಹಿಂಸೆಪಡಿಸಿದರೆ ಮತ್ತು ನಿಮ್ಮ ಮೇಲೆ
ಕೆಟ್ಟ ಕೆಟ್ಟ ವಿಷಯಗಳನ್ನು ಸುಳ್ಳಾಗಿ ಹೊರಿಸಿದರೆ ನೀವು
ಧನ್ಯರಾಗಿದ್ದೀರಿ. 12ಸಂತೋಷಪಡಿರಿ, ಆನಂದಿಸಿರಿ. ಪರ
ಲೋಕದಲ್ಲಿ ನಿಮಗಾಗಿ ಕಾದಿರುವ ಹೆಚ್ಚಿನ ಪ್ರತಿಫಲವನ್ನು
ಹೊಂದುವಿರಿ. ನಿಮಗಿಂತ ಮುಂಚೆ ಜೀವಿಸಿದ್ದ ಪ್ರವಾದಿಗಳಿಗೂ
ಜನರು ಹೀಗೆಯೇ ಮಾಡಿದರು.

### ನೀವು ಉಪ್ಪಿನಂತಿದ್ದೀರಿ, ಬೆಳಕಿನಂತಿದ್ದೀರಿ
(ಮಾರ್ಕ 9:50; ಲೂಕ 14:34-35)

13 ''ನೀವು ಭೂಮಿಗೆ ಉಪ್ಪಾಗಿದ್ದೀರಿ. ಆದರೆ ಉಪ್ಪೇ ತನ್ನ
ರುಚಿಯನ್ನು ಕಳೆದುಕೊಂಡರೆ ಅದನ್ನು ಮತ್ತೆ ಉಪ್ಪನ್ನಾಗಿ
ಮಾಡಲು ಸಾಧ್ಯವಿಲ್ಲ; ಅಂಥ ಉಪ್ಪಿನಿಂದ ಪ್ರಯೋಜನವೇನೂ
ಇಲ್ಲ. ಜನರು ಅದನ್ನು ಹೊರಗೆ ಬಿಸಾಡಿ ಅದರ ಮೇಲೆ
ನಡೆದಾಡುವರು.
14 ''ನೀವು ಲೋಕಕ್ಕೆ ಬೆಳಕಾಗಿದ್ದೀರಿ. ಗುಡ್ಡದ ಮೇಲೆ ಕಟ್ಟಿದ
ಪಟ್ಟಣ ಮರೆಯಾಗಿರಲಾರದು. 15ಜನರು ದೀಪವನ್ನು
ಪಾತ್ರೆಯ ಕೆಳಗೆ ಮುಚ್ಚಿಡುವುದಿಲ್ಲ. ಜನರು ದೀಪವನ್ನು ದೀಪ

**ದೀನರು ... ಹೊಂದಿ ಕೊಳ್ಳುವರು** ಕೀರ್ತನೆ 37:11

ಸ್ತಂಭದ ಮೇಲೆ ಇಡುತ್ತಾರೆ. ಆಗ ಮನೆಯಲ್ಲಿರುವವರಿಗೆಲ್ಲಾ
ಬೆಳಕು ಪ್ರಕಾಶಿಸುವುದು. 16ಅದೇ ರೀತಿಯಲ್ಲಿ ನೀವು ಜನರಿಗೆ
ಬೆಳಕಾಗಿರಬೇಕು. ಹೀಗೆ ಅವರು ನಿಮ್ಮ ಸತ್ಕಾರ್ಯಗಳನ್ನು
ಕಂಡು ಪರಲೋಕದಲ್ಲಿರುವ ನಿಮ್ಮ ತಂದೆಯನ್ನು
ಕೊಂಡಾಡಲಿ.

### ಪವಿತ್ರ ಗ್ರಂಥಕ್ಕೆ ಅಂತ್ಯವೇ ಇಲ್ಲ

17“ನಾನು ಮೋಶೆಯ ಧರ್ಮಶಾಸ್ತ್ರವನ್ನಾಗಲಿ ಪ್ರವಾದಿಗಳ
ಉಪದೇಶಗಳನ್ನಾಗಲಿ ತೆಗೆದುಹಾಕುವುದಕ್ಕೆ ಬಂದೆನೆಂದು
ನೆನೆಸಬೇಡಿರಿ. ನಾನು ಅವುಗಳನ್ನು ನಾಶಮಾಡುವುದಕ್ಕಾಗಿ
ಬರದೆ ಅವುಗಳನ್ನು ನೆರವೇರಿಸುವುದಕ್ಕಾಗಿ ಬಂದೆನು. 18 ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ಆಕಾಶ ಮತ್ತು ಭೂಮಿ ಅಳಿದು
ಹೋಗುವವರೆಗೂ ಧರ್ಮಶಾಸ್ತ್ರದಿಂದ ಏನೂ ಅಳಿದು
ಹೋಗುವುದಿಲ್ಲ. ಎಲ್ಲಾ ನೆರವೇರುವತನಕ ಧರ್ಮಶಾಸ್ತ್ರದ
ಒಂದು ಅಕ್ಷರವಾಗಲಿ ಅಥವಾ ಅದರ ಒಂದು ಚುಕ್ಕೆಯಾಗಲಿ
ಅಳಿದುಹೋಗುವುದಿಲ್ಲ. 19ಮನುಷ್ಯನು ಪ್ರತಿ ಆಜ್ಞೆಗೂ,
ಅಂದರೆ ಸಣ್ಣಸಣ್ಣ ಆಜ್ಞೆಗೂ ವಿಧೇಯನಾಗಿರಬೇಕು. ಒಬ್ಬನು
ಯಾವ ಆಜ್ಞೆಗಾದರೂ ಅವಿಧೇಯನಾಗಿ ಜೀವಿಸುತ್ತಾ ಆ ಆಜ್ಞೆಗೆ
ಬೇರೆಯವರೂ ಅವಿಧೇಯರಾಗಿರಬೇಕೆಂದು ಬೋಧಿಸಿದರೆ
ಅವನು ಪರಲೋಕರಾಜ್ಯದಲ್ಲಿ ಅತ್ಯಲ್ಪನಾಗಿರುವನು. ಆದರೆ
ಧರ್ಮಶಾಸ್ತ್ರಕ್ಕೆ ವಿಧೇಯನಾಗಿ ಜೀವಿಸುತ್ತಾ ಧರ್ಮಶಾಸ್ತ್ರಕ್ಕೆ
ವಿಧೇಯರಾಗಬೇಕೆಂದು ಬೇರೆಯವರಿಗೂ ಬೋಧಿಸುವವನು
ಪರಲೋಕರಾಜ್ಯದಲ್ಲಿ ಪ್ರಮುಖನಾಗಿರುವನು. 20ಧರ್ಮೋಪ
ದೇಶಕರಿಗಿಂತಲೂ ಫರಿಸಾಯರಿಗಿಂತಲೂ ನೀವು ಉತ್ತಮ
ವಾದದ್ದನ್ನು ಮಾಡಬೇಕು. ಇಲ್ಲವಾದರೆ ನೀವು ಪರಲೋಕ
ರಾಜ್ಯವನ್ನು ಪ್ರವೇಶಿಸಲಾರಿರಿ.

### ಕೋಪವನ್ನು ಕುರಿತು ಯೇಸುವಿನ ಉಪದೇಶ

21“ಯಾರನ್ನೂ ಕೊಲೆಮಾಡಬಾರದು.* ಕೊಲೆ ಮಾಡು
ವವನು ನ್ಯಾಯತೀರ್ಪಿಗೆ ಒಳಗಾಗುವನು’ ಎಂದು ಬಹುಕಾಲದ
ಹಿಂದೆ ನಮ್ಮ ಜನರಿಗೆ ಹೇಳಿದ್ದನ್ನು ನೀವು ಕೇಳಿದ್ದಿರಿ. 22ಆದರೆ
ನಾನು ನಿಮಗೆ ಹೇಳುವುದೇನೆಂದರೆ ಯಾರ ಮೇಲೂ ಕೋಪ
ಗೊಳ್ಳಬೇಡಿ. ಪ್ರತಿಯೊಬ್ಬನೂ ನಿಮ್ಮ ಸಹೋದರ. ನೀವು ಬೇರೆ
ಯವರ ಮೇಲೆ ಕೋಪಗೊಂಡರೆ ನ್ಯಾಯತೀರ್ಪಿಗೆ ಗುರಿ
ಯಾಗುವಿರಿ. ನೀವು ಯಾರಿಗಾದರೂ ಕೆಟ್ಟ ಮಾತುಗಳ
ನ್ನಾಡಿದರೆ, ಯೆಹೂದ್ಯರ ನ್ಯಾಯಸಭೆಯ* ವಿಚಾರಣೆಗೆ ಗುರಿ
ಯಾಗುವಿರಿ. ನೀವು ಯಾರನ್ನಾದರೂ ‘ಮೂರ್ಖಾ’* ಎಂದು
ಕರೆದರೆ, ಅಗ್ನಿ ನರಕಕ್ಕೆ ಸೇರುವ ಅಪಾಯದಲ್ಲಿದ್ದೀರಿ.
23“ಆದ್ದರಿಂದ ನೀವು ನಿಮ್ಮ ಕಾಣಿಕೆಯನ್ನು ಯಜ್ಞವೇದಿಕೆಯ
ಮುಂದೆ ದೇವರಿಗೆ ಅರ್ಪಿಸುವಾಗ, ನಿಮ್ಮ ಸಹೋದರನಿಗೆ ನಿಮ್ಮ
ಮೇಲೆ ಏನೋ ಮನಸ್ತಾಪವಿದೆ ಎಂಬುದು ನಿಮ್ಮ ನೆನಪಿಗೆ
ಬಂದರೆ, 24ಆಗ ನಿಮ್ಮ ಕಾಣಿಕೆಯನ್ನು ಯಜ್ಞವೇದಿಕೆಯ ಬಳಿ
ಯಲ್ಲೇ ಬಿಟ್ಟುಹೋಗಿ, ಮೊದಲು ಅವನೊಂದಿಗೆ ಸಮಾಧಾನ
ಮಾಡಿಕೊಳ್ಳಿರಿ. ಆಮೇಲೆ ಬಂದು ನಿಮ್ಮ ಕಾಣಿಕೆಯನ್ನು ಸಲ್ಲಿಸಿ.
25“ನಿಮ್ಮ ವಿರೋಧಿಯು ನಿಮ್ಮನ್ನು ನ್ಯಾಯಾಲಯಕ್ಕೆ ಎಳೆ
ದೊಯ್ಯುವಾಗ ಬೇಗನೆ ಅವನೊಂದಿಗೆ ಸ್ನೇಹಿತರಾಗಿ. ನೀವು
ನ್ಯಾಯಾಲಯಕ್ಕೆ ಹೋಗುವ ಮೊದಲೇ ಇದನ್ನು ಮಾಡಬೇಕು.
ನೀವು ಅವನ ಸ್ನೇಹಿತರಾಗದಿದ್ದರೆ, ಅವನು ನಿಮ್ಮನ್ನು ನ್ಯಾಯಾಧಿ
ಪತಿಗೆ ಒಪ್ಪಿಸಬಹುದು. ನ್ಯಾಯಾಧಿಪತಿಯು ನಿಮ್ಮನ್ನು ಸೆರೆ
ಮನೆಗೆ ಹಾಕಲು ಕಾವಲುಗಾರನಿಗೆ ಒಪ್ಪಿಸಬಹುದು. 26ಆಗ
ನೀವು ನಿಮ್ಮ ಸಾಲವನ್ನೆಲ್ಲ ತೀರಿಸುವ ತನಕ ಸೆರೆಯಿಂದ
ಬಿಡುಗಡೆ ಆಗುವುದಿಲ್ಲವೆಂದು ನಾನು ನಿಮಗೆ ಹೇಳುತ್ತೇನೆ.

### ಲೈಂಗಿಕ ಪಾಪದ ಕುರಿತು ಯೇಸುವಿನ ಉಪದೇಶ

27“ವ್ಯಭಿಚಾರ ಮಾಡಬೇಡಿರಿ”* ಎಂದು ಹೇಳಿದ್ದನ್ನು
ನೀವು ಕೇಳಿದ್ದೀರಿ. 28ಆದರೆ ಒಬ್ಬನು ಪರಸ್ತ್ರೀಯನ್ನು ನೋಡಿ
ಅವಳೊಂದಿಗೆ ಲೈಂಗಿಕ ಸಂಪರ್ಕ ಹೊಂದಲು ಬಯಸಿದರೆ,
ಅವನು ಆಗಲೇ ತನ್ನ ಮನಸ್ಸಿನಲ್ಲಿ ಅವಳೊಂದಿಗೆ ವ್ಯಭಿಚಾರ
ವನ್ನು ಮಾಡಿದ್ದಾನೆಂದು ನಾನು ನಿಮಗೆ ಹೇಳುತ್ತೇನೆ. 29ನಿನ್ನ
ಬಲಗಣ್ಣು ನಿನ್ನನ್ನು ಪಾಪಕ್ಕೊಳಗಾಗುವಂತೆ ಮಾಡಿದರೆ,
ಅದನ್ನು ಕಿತ್ತು ಬಿಸಾಡು. ನಿನ್ನ ಪೂರ್ಣಶರೀರವು ನರಕಕ್ಕೆ ಬೀಳು
ವುದಕ್ಕಿಂತ ನಿನ್ನ ಶರೀರದ ಒಂದು ಭಾಗವನ್ನು ಕಳೆದುಕೊಳ್ಳು
ವುದೇ ಮೇಲು. 30ನಿನ್ನ ಬಲಗೈ ನಿನ್ನನ್ನು ಪಾಪಕ್ಕೊಳಗಾಗುವಂತೆ
ಮಾಡಿದರೆ, ಅದನ್ನು ಕತ್ತರಿಸಿ ಬಿಸಾಡು. ನಿನ್ನ ಪೂರ್ಣ ಶರೀರವು
ನರಕಕ್ಕೆ ಹೋಗುವದಕ್ಕಿಂತ ನಿನ್ನ ಶರೀರದ ಒಂದು ಭಾಗವನ್ನು
ಕಳೆದುಕೊಳ್ಳುವುದೇ ಮೇಲು.

### ವಿವಾಹ ವಿಚ್ಛೇದನ ಕುರಿತು ಯೇಸುವಿನ ಉಪದೇಶ

(ಮಾರ್ಕ 19:9; ಮಾರ್ಕ 10:11-12; ಲೂಕ 16:18)

31“ತನ್ನ ಹೆಂಡತಿಯನ್ನು ಬಿಟ್ಟುಬಿಡಬೇಕೆಂದಿರುವವನು,
ಅವಳಿಗೆ ವಿವಾಹ ವಿಚ್ಛೇದನ ಪತ್ರವನ್ನು ಕೊಡಲಿ* ಎಂದು
ಹೇಳಲ್ಪಟ್ಟಿದೆ. 32ಆದರೆ ನಾನು ಹೇಳುವುದೇನೆಂದರೆ, ತನ್ನ
ಹೆಂಡತಿಯನ್ನು ಬಿಟ್ಟುಬಿಡುವವನೇ ಅವಳು ವ್ಯಭಿಚಾರಿಣಿ
ಯಾಗುವುದಕ್ಕೆ ಕಾರಣನಾಗುತ್ತಾನೆ. ಹೆಂಡತಿಯು ಬೇರೊಬ್ಬ
ಪುರುಷನೊಂದಿಗೆ ಲೈಂಗಿಕ ಸಂಬಂಧವಿಟ್ಟುಕೊಂಡಿದ್ದರೆ ಮಾತ್ರ
ಅವಳನ್ನು ಗಂಡನು ಬಿಟ್ಟುಬಿಡಬಹುದು. ವಿವಾಹ ವಿಚ್ಛೇದನ
ಹೊಂದಿದವಳನ್ನು ಮದುವೆಯಾಗುವವನು ಸಹ ವ್ಯಭಿಚಾರ
ಮಾಡಿದವನಾಗುತ್ತಾನೆ.

### ಆಣೆ ಇಡುವುದರ ಕುರಿತು ಯೇಸುವಿನ ಉಪದೇಶ

33“ನೀವಿಟ್ಟ ಆಣೆಯನ್ನು ಮೀರಬೇಡಿರಿ. ಪ್ರಭುವಿಗೆ
ನೀವಿಟ್ಟ ಆಣೆಗಳನ್ನು ಕೈಗೊಳ್ಳಲೇಬೇಕು* ಎಂದು ನಮ್ಮ
ಪೂರ್ವಿಕರಿಗೆ ಹೇಳಿದ್ದನ್ನು ನೀವು ಕೇಳಿದ್ದೀರಿ. 34ಆದರೆ ನಾನು

---

**ಯಾರನ್ನೂ … ಬಾರದು** ವಿಮೋಚನ.20:13; ಧರ್ಮೋಪದೇಶ. 5:17

**ನ್ಯಾಯಸಭೆ** ಇದು ಯೆಹೂದ್ಯರ ಸರ್ವೋನ್ನತ ಸಭೆಯಾಗಿತ್ತು.

**ಮೂರ್ಖಾ** ಮೂಲಭಾಷೆಯಲ್ಲಿ “ರಾಕ” ಎನ್ನುತ್ತಾರೆ. ಇದರರ್ಥ ನಿಷ್ಪ್ರಯೋಜಕನಾದ ಬುದ್ಧಿಹೀನ.

**‘ವ್ಯಭಿಚಾರ ಮಾಡಬೇಡಿರಿ’** ವಿಮೋಚನ..20:14; ಧರ್ಮೋಪದೇಶ.. 5:18

**ತನ್ನ… ಕೊಡಲಿ** ಧರ್ಮೋಪದೇಶ.. 24:1

**ನೀವಿಟ್ಟ … ಬೇಕು** ಯಾಜಕ. 19:12; ಅರಣ್ಯ. 30:2; ಧರ್ಮೋಪದೇಶ. 23:21

ಹೇಳುವುದೇನೆಂದರೆ, ಆಣೆ ಇಡಲೇಬೇಡಿ. ಪರಲೋಕದ
ಮೇಲೂ ಆಣೆ ಇಡಬೇಡಿ, ಏಕೆಂದರೆ ಪರಲೋಕವು ದೇವರ
ಸಿಂಹಾಸನ.
35 ಭೂಮಿಯ ಮೇಲೂ ಆಣೆ ಇಡಬೇಡಿ. ಏಕೆಂದರೆ
ಭೂಮಿಯು ದೇವರ ಪಾದಪೀಠ. ಜೆರುಸಲೇಮಿನ ಮೇಲೂ
ಆಣೆ ಇಡಬೇಡಿ, ಏಕೆಂದರೆ ಅದು ಆ ಮಹಾರಾಜನ ಪಟ್ಟಣ.
36 ನಿಮ್ಮ ತಲೆಯ ಮೇಲೂ ಆಣೆ ಇಡಬೇಡಿ. ನಿಮ್ಮ ತಲೆಯ
ಒಂದು ಕೂದಲನ್ನಾದರೂ ಬೆಳ್ಳಗೆ ಅಥವಾ ಕಪ್ಪಗೆ ಮಾಡಲು
ನಿಮ್ಮಿಂದಾಗದು. 37 ಹೌದಾದರೆ 'ಹೌದು' ಎನ್ನಿರಿ. ಇಲ್ಲವಾದರೆ
'ಇಲ್ಲ' ಎನ್ನಿರಿ. ನೀವು ಇದಕ್ಕಿಂತ ಹೆಚ್ಚಾಗಿ ಹೇಳುವಂಥದ್ದು
ಸೈತಾನನಿಂದ ಪ್ರೇರಿತವಾದದ್ದು.

### ಸೇಡಿನ ಬಗ್ಗೆ ಯೇಸುವಿನ ಉಪದೇಶ

(ಲೂಕ 6:29-30)

38 ''ಕಣ್ಣಿಗೆ ಕಣ್ಣು, ಹಲ್ಲಿಗೆ ಹಲ್ಲು'* ಎಂದು ಹೇಳಿರು
ವುದನ್ನು ನೀವು ಕೇಳಿದ್ದೀರಿ. 39 ಆದರೆ ನಾನು ನಿಮಗೆ ಹೇಳುವು
ದೇನಂದರೆ, ದುಷ್ಟನಿಗೆ ವಿರೋಧವಾಗಿ ನಿಂತುಕೊಳ್ಳಬೇಡಿ.
ಯಾವನಾದರೂ ನಿಮ್ಮ ಬಲಗೆನ್ನೆಗೆ ಹೊಡೆದರೆ, ಅವನಿಗೆ
ಮತ್ತೊಂದು ಕೆನ್ನೆಯನ್ನೂ ಒಡ್ಡಿರಿ. 40 ಯಾವನಾದರೂ ನಿಮ್ಮ
ಮೇಲಂಗಿಗಾಗಿ ನಿಮ್ಮನ್ನು ನ್ಯಾಯಾಲಯಕ್ಕೆ ಎಳೆದೊಯ್ಯ
ಬೇಕೆಂದಿದ್ದರೆ, ನಿಮ್ಮ ಒಳಂಗಿಯನ್ನು ಸಹ ಅವನಿಗೆ ಕೊಟ್ಟು
ಬಿಡಿರಿ.
41 ಯಾವ ಸೈನಿಕನಾದರೂ ತನ್ನೊಂದಿಗೆ ಒಂದು ಮೈಲಿ ದೂರ
ಬರಬೇಕೆಂದು ನಿಮ್ಮನ್ನು ಒತ್ತಾಯಿಸಿದರೆ, ಅವನೊಂದಿಗೆ
ಎರಡು ಮೈಲಿ ದೂರಹೋಗಿ. 42 ಯಾವನಾದರೂ ನಿಮ್ಮಲ್ಲಿ
ರುವ ಯಾವುದನ್ನಾದರೂ ಕೇಳಿದರೆ, ಅವನಿಗೆ ಕೊಡಿ. ನಿಮ್ಮಿಂದ
ಸಾಲ ತೆಗೆದುಕೊಳ್ಳಬೇಕೆಂದು ಬಂದವನಿಗೆ ಕೊಡದಿರಬೇಡಿ.

### ಎಲ್ಲರನ್ನು ಪ್ರೀತಿಸಿರಿ

(ಲೂಕ 6:27-28, 32-36)

43 ''ನಿನ್ನ ಸ್ನೇಹಿತರನ್ನು ಪ್ರೀತಿಸು ಮತ್ತು ನಿನ್ನ ಶತ್ರುಗಳನ್ನು
ದ್ವೇಷಿಸು* ಎಂದು ಹೇಳಿರುವುದನ್ನು ನೀವು ಕೇಳಿದ್ದೀರಿ.
44 ಆದರೆ ನಾನು ನಿಮಗೆ ಹೇಳುವುದೇನೆಂದರೆ, ನಿಮ್ಮ ಶತ್ರು
ಗಳನ್ನು ಪ್ರೀತಿಸಿರಿ. ನಿಮಗೆ ಕೆಟ್ಟದ್ದನ್ನು ಮಾಡುವ ಜನರಿಗಾಗಿ
ಪ್ರಾರ್ಥಿಸಿರಿ. 45 ಆಗ ನೀವು ಪರಲೋಕದಲ್ಲಿರುವ ನಿಮ್ಮ
ತಂದೆಯ ನಿಜವಾದ ಮಕ್ಕಳಾಗುವಿರಿ. ನಿಮ್ಮ ತಂದೆಯು ಒಳ್ಳೆಯ
ವರಿಗಾಗಿ ಮತ್ತು ಕೆಟ್ಟವರಿಗಾಗಿ ಸೂರ್ಯನನ್ನು ಉದಯಿಸು
ತ್ತಾನೆ ಮತ್ತು ಮಳೆಯನ್ನು ಸುರಿಸುತ್ತಾನೆ. 46 ನಿಮ್ಮನ್ನು ಪ್ರೀತಿಸುವ
ಜನರನ್ನೇ ನೀವು ಪ್ರೀತಿಸಿದರೆ, ಅದರಿಂದ ನಿಮಗೇನು ಪ್ರತಿಫಲ
ದೊರೆಯುವುದು? ಸುಂಕದವರು ಸಹ ಹಾಗೆ ಮಾಡುತ್ತಾರೆ.
47 ನೀವು ನಿಮ್ಮ ಸ್ನೇಹಿತರಿಗೆ ಮಾತ್ರ ಒಳ್ಳೆಯವರಾಗಿದ್ದರೆ, ನೀವು
ಬೇರೆಯವರಿಗಿಂತ ಉತ್ತಮರೇನೂ ಅಲ್ಲ. ದೇವರನ್ನರಿಯದ
ಜನರು ಸಹ ತಮ್ಮ ಸ್ನೇಹಿತರಿಗೆ ಒಳ್ಳೆಯವರಾಗಿರುತ್ತಾರೆ. 48 ಆದ್ದ
ರಿಂದ ಪರಲೋಕದಲ್ಲಿರುವ ನಿಮ್ಮ ತಂದೆಯು ಪರಿಪೂರ್ಣ
ನಾಗಿರುವಂತೆಯೇ ನೀವೂ ಪರಿಪೂರ್ಣರಾಗಿರಬೇಕು.

### ಕೊಡುವುದರ ಕುರಿತು ಯೇಸುವಿನ ಉಪದೇಶ

6 ''ಎಚ್ಚರವಾಗಿರಿ! ನೀವು ಒಳ್ಳೆಯ ಕಾರ್ಯಗಳನ್ನು ಜನರ
ಮುಂದೆ ಮಾಡಬೇಡಿ. ಜನರು ನೋಡಲೆಂದು ನೀವು ಅವು
ಗಳನ್ನು ಮಾಡಿದರೆ ಪರಲೋಕದಲ್ಲಿರುವ ನಿಮ್ಮ ತಂದೆಯಿಂದ
ನಿಮಗೆ ಪ್ರತಿಫಲ ದೊರೆಯುವುದಿಲ್ಲ.
2 ''ನೀವು ಬಡಜನರಿಗೆ ಮಾಡುವ ದಾನವನ್ನು ಪ್ರಕಟಿಸಬೇಡಿ.
ನೀವು ಕಪಟಿಗಳಂತೆ ಮಾಡಕೂಡದು. ತಾವು ಮಾಡುವ ದಾನ
ವನ್ನು ಜನರಿಗೆ ತೋರಿಸಿಕೊಳ್ಳುವುದಕ್ಕಾಗಿ ಕಪಟಿಗಳು ಸಭಾ
ಮಂದಿರಗಳಲ್ಲಿ ಮತ್ತು ಬೀದಿಗಳಲ್ಲಿ ತುತ್ತೂರಿ ಊದಿಸುತ್ತಾರೆ.
ಜನರಿಂದ ಗೌರವ ಪಡೆಯಬೇಕೆಂಬುದೇ ಅವರ ಉದ್ದೇಶ.
3 ಆದ್ದರಿಂದ ನೀವು ಬಡಜನರಿಗೆ ಕೊಡುವಾಗ ಬಹಳ ಗುಟ್ಟಾಗಿ
ಕೊಡಿ. ನೀವು ಮಾಡುವಂಥದ್ದು ಯಾರಿಗೂ ತಿಳಿಯದಿರಲಿ.
4 ನೀವು ದಾನವನ್ನು ರಹಸ್ಯವಾಗಿ ಕೊಡಬೇಕು. ರಹಸ್ಯದಲ್ಲಿ
ನಡೆಯುವ ಕಾರ್ಯಗಳನ್ನು ನೋಡಬಲ್ಲ ನಿಮ್ಮ ತಂದೆ ನಿಮಗೆ
ಪ್ರತಿಫಲ ಕೊಡುವನು.

### ಪ್ರಾರ್ಥನೆಯ ಕುರಿತು ಯೇಸುವಿನ ಉಪದೇಶ

(ಲೂಕ 11:2-4)

5 ''ನೀವು ಪ್ರಾರ್ಥಿಸುವಾಗ ಕಪಟಿಗಳ ಹಾಗೆ ಪ್ರಾರ್ಥಿಸಬೇಡಿ.
ಕಪಟಿಗಳು ಸಭಾಮಂದಿರಗಳಲ್ಲಿ ಮತ್ತು ಬೀದಿಯ ಮೂಲೆ
ಗಳಲ್ಲಿ ನಿಂತುಕೊಂಡು ಗಟ್ಟಿಯಾಗಿ ಪ್ರಾರ್ಥಿಸಲು ಇಷ್ಟಪಡು
ತ್ತಾರೆ. ತಾವು ಪ್ರಾರ್ಥಿಸುವುದನ್ನು ಜನರು ನೋಡಬೇಕೆಂಬುದೇ
ಅವರ ಬಯಕೆ. ಅವರು ಆಗಲೇ ಅದರ ಪೂರ್ಣ ಪ್ರತಿಫಲವನ್ನು
ಹೊಂದಿಕೊಂಡಾಯಿತೆಂದು ನಾನು ನಿಮಗೆ ಸತ್ಯವಾಗಿ ಹೇಳು
ತ್ತೇನೆ. 6 ನೀವು ಪ್ರಾರ್ಥನೆ ಮಾಡಬೇಕಾದರೆ, ನಿಮ್ಮ ಕೋಣೆ
ಯೊಳಗೆ ಹೋಗಿ ಬಾಗಿಲನ್ನು ಮುಚ್ಚಿಕೊಂಡು ನಿಮಗೆ
ಕಾಣದಿರುವ ನಿಮ್ಮ ತಂದೆಗೆ ಪ್ರಾರ್ಥಿಸಿ. ರಹಸ್ಯದಲ್ಲಿ ನಡೆಯುವ
ಕಾರ್ಯಗಳನ್ನು ನೋಡಬಲ್ಲ ನಿಮ್ಮ ತಂದೆಯು ನಿಮಗೆ
ಪ್ರತಿಫಲವನ್ನು ಕೊಡುವನು.
7 ''ನೀವು ಪ್ರಾರ್ಥಿಸುವಾಗ ದೇವರನ್ನು ತಿಳಿದಿಲ್ಲದ ಜನರಂತೆ
ಪ್ರಾರ್ಥಿಸಬೇಡಿ. ಅವರು ಅರ್ಥವಿಲ್ಲದ ಸಂಗತಿಗಳನ್ನು ಹೇಳು
ತ್ತಲೇ ಇರುತ್ತಾರೆ. ಆ ರೀತಿ ಪ್ರಾರ್ಥಿಸಬೇಡಿ. ತಾವು ಅನೇಕ
ವಿಷಯಗಳನ್ನು ಹೇಳುವುದರಿಂದ ದೇವರು ತಮ್ಮ ಪ್ರಾರ್ಥನೆ
ಯನ್ನು ಕೇಳುತ್ತಾನೆಂಬುದು ಅವರ ಆಲೋಚನೆ. 8 ನೀವು
ಅವರಂತಾಗಬೇಡಿ. ನೀವು ಕೇಳುವುದಕ್ಕೆ ಮೊದಲೇ ನಿಮಗೆ
ಏನೇನು ಬೇಕು ಎಂಬುದು ನಿಮ್ಮ ತಂದೆಗೆ ತಿಳಿದಿದೆ. 9 ಆದ್ದರಿಂದ
ನೀವು ಹೀಗೆ ಪ್ರಾರ್ಥಿಸಿರಿ:

'ಪರಲೋಕದಲ್ಲಿರುವ ನಮ್ಮ ತಂದೆಯೇ, ನಿನ್ನ
ಹೆಸರು ಪರಿಶುದ್ಧವಾಗಿರಲಿ.
10 ನಿನ್ನ ರಾಜ್ಯ ಬರಲಿ. ನಿನ್ನ ಚಿತ್ತ ಪರಲೋಕದಲ್ಲಿ
ನೆರವೇರುವಂತೆ ಭೂಲೋಕದಲ್ಲಿಯೂ
ನೆರವೇರಲಿ.
11 ನಮ್ಮ ಅನುದಿನದ ಆಹಾರವನ್ನು ಈ ಹೊತ್ತು
ನಮಗೆ ದಯಪಾಲಿಸಿ.
12 ನಮಗೆ ತಪ್ಪು ಮಾಡಿದವರನ್ನು ನಾವು ಕ್ಷಮಿಸಿ
ದಂತೆಯೆ ನಮ್ಮ ಪಾಪಗಳನ್ನು ಕ್ಷಮಿಸು.

---

**ಕಣ್ಣಿಗೆ ... ಹಲ್ಲು** ವಿಮೋಚನ.21:24; ಯಾಜಕ.24:20

**ನಿನ್ನ ... ದ್ವೇಷಿಸು** ಯಾಜಕ. 19:18

13 ನಮ್ಮನ್ನು ಶೋಧನೆಗೆ ಒಳಪಡಿಸದೆ ಕೆಡುಕನಿಂದ
(ಸೈತಾನನಿಂದ) ನಮ್ಮನ್ನು ರಕ್ಷಿಸು.'

14ಹೌದು, ಬೇರೆಯವರು ನಿಮಗೆ ಮಾಡಿದ ತಪ್ಪುಗಳನ್ನು
ನೀವು ಕ್ಷಮಿಸಿದರೆ, ಪರಲೋಕದಲ್ಲಿರುವ ನಿಮ್ಮ ತಂದೆಯೂ
ನಿಮ್ಮ ತಪ್ಪುಗಳನ್ನು ಕ್ಷಮಿಸುತ್ತಾನೆ. 15ಆದರೆ ಜನರು ನಿಮಗೆ
ಮಾಡಿದ ತಪ್ಪುಗಳನ್ನು ನೀವು ಕ್ಷಮಿಸದಿದ್ದರೆ, ಪರಲೋಕದಲ್ಲಿ
ರುವ ನಿಮ್ಮ ತಂದೆಯು ಸಹ ನಿಮ್ಮ ತಪ್ಪುಗಳನ್ನು ಕ್ಷಮಿಸುವುದಿಲ್ಲ.

### ಉಪವಾಸದ ಕುರಿತು ಯೇಸುವಿನ ಉಪದೇಶ

16 'ನೀವು ಉಪವಾಸ ಮಾಡುವಾಗ ನಿಮ್ಮ ಮುಖವನ್ನು ಸಪ್ಪಗೆ
ಮಾಡಿಕೊಳ್ಳಬೇಡಿ. ಕಪಟಿಗಳು ಹಾಗೆ ಮಾಡುತ್ತಾರೆ. ಆದರೆ
ನೀವು ಕಪಟಿಗಳಂತಿರಬೇಡಿ. ತಾವು ಉಪವಾಸ ಮಾಡುತ್ತಿರು
ವುದಾಗಿ ಜನರಿಗೆ ತೋರ್ಪಡಿಸಿಕೊಳ್ಳಲು ಅವರು ತಮ್ಮ ಮುಖ
ಗಳನ್ನು ವಿಕಾರ ಮಾಡಿಕೊಳ್ಳುತ್ತಾರೆ. ಆ ಕಪಟಿಗಳು ತಮಗೆ
ಬರತಕ್ಕ ಪ್ರತಿಫಲವನ್ನು ಸಂಪೂರ್ಣವಾಗಿ ಹೊಂದಾಯಿತೆಂದು
ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ. 17ಆದ್ದರಿಂದ ನೀವು
ಉಪವಾಸ ಮಾಡುವಾಗ, ಮುಖವನ್ನು ತೊಳೆದುಕೊಳ್ಳಿರಿ; ತಲೆಗೆ
ಎಣ್ಣೆಯನ್ನು ಹಚ್ಚಿಕೊಳ್ಳಿರಿ.
18ಆಗ ನೀವು ಉಪವಾಸ ಮಾಡುತ್ತಿದ್ದೀರೆಂದು ಜನರಿಗೆ
ಗೊತ್ತಾಗುವುದಿಲ್ಲ. ಆದರೆ ನಿಮಗೆ ಅಗೋಚರವಾಗಿರುವ ನಿಮ್ಮ
ತಂದೆಯು ನಿಮ್ಮನ್ನು ನೋಡುತ್ತಾನೆ. ರಹಸ್ಯದಲ್ಲಿ ನಡೆಯುವ
ಸಂಗತಿಗಳನ್ನು ನೋಡಬಲ್ಲ ನಿಮ್ಮ ತಂದೆಯು ನಿಮಗೆ
ಪ್ರತಿಫಲವನ್ನು ಕೊಡುತ್ತಾನೆ.

### ಹಣಕ್ಕಿಂತ ದೇವರೇ ಬಹು ಮುಖ್ಯ

(ಲೂಕ 12:33-34; 11:34-36; 16:13)

19 ''ನಿಮಗೋಸ್ಕರ ಈ ಭೂಮಿಯ ಮೇಲೆ ಭಂಡಾರಗಳನ್ನು
ಮಾಡಿಕೊಳ್ಳಬೇಡಿ. ಅವು ಕಿಲುಬು ಹತ್ತಿ ಹಾಳಾಗುತ್ತವೆ. ಕಳ್ಳರು
ನಿಮ್ಮ ಮನೆಯೊಳಗೆ ಕನ್ನಕೊರೆದು ನಿಮ್ಮಲ್ಲಿರುವುದನ್ನು ಕದಿಯ
ಬಲ್ಲರು.
20ಆದ್ದರಿಂದ ನಿಮ್ಮ ಭಂಡಾರಗಳನ್ನು ಪರಲೋಕದಲ್ಲಿ
ಮಾಡಿಟ್ಟುಕೊಳ್ಳಿ. ಅಲ್ಲಿ ಅವುಗಳಿಗೆ ನುಸಿಹಿಡಿಯುವುದಿಲ್ಲ.
ಕಿಲುಬುಹತ್ತುವುದಿಲ್ಲ. ಕಳ್ಳರು ಕನ್ನಕೊರೆದು ಕದಿಯುವುದಿಲ್ಲ.
21ನಿಮ್ಮ ಭಂಡಾರ ಎಲ್ಲಿರುವುದೋ ಅಲ್ಲೇ ನಿಮ್ಮ ಮನ
ಸ್ಸಿರುವುದು.
22''ಕಣ್ಣು ಶರೀರಕ್ಕೆ ಬೆಳಕಾಗಿದೆ. ನಿನ್ನ ಕಣ್ಣು ಸರಿಯಿದ್ದರೆ,
ನಿನ್ನ ದೇಹವೆಲ್ಲಾ ಬೆಳಕಿನಿಂದ ಕೂಡಿರುವುದು. 23ಆದರೆ ನಿನ್ನ
ಕಣ್ಣು ಕೆಟ್ಟಿದ್ದರೆ ನಿನ್ನ ಶರೀರವೆಲ್ಲ ಕತ್ತಲೆಯಿಂದ (ಪಾಪದಿಂದ)
ತುಂಬಿರುವದು. ನಿನ್ನಲ್ಲಿರುವ ಒಂದೇ ಬೆಳಕು ನಿಜವಾಗಿಯೂ
ಕತ್ತಲಾದರೆ, ಆಗ ನೀನು ಕಗ್ಗತ್ತಲಲ್ಲಿರುವೆ.
24''ಯಾವನೂ ಇಬ್ಬರು ಯಜಮಾನರಿಗೆ ಒಂದೇ ಸಮಯ
ದಲ್ಲಿ ಸೇವೆ ಮಾಡಲಾರನು. ಅವನು ಒಬ್ಬ ಯಜಮಾನನನ್ನು
ದ್ವೇಷಿಸಿ ಮತ್ತೊಬ್ಬನನ್ನು ಪ್ರೀತಿಸುತ್ತಾನೆ ಅಥವಾ ಒಬ್ಬ ಯಜ
ಮಾನನನ್ನು ಹಿಂಬಾಲಿಸಿ ಮತ್ತೊಬ್ಬನನ್ನು ತಾತ್ಸಾರ ಮಾಡು
ತ್ತಾನೆ. ಆದ್ದರಿಂದ ನೀನು ದೇವರಿಗೆ ಮತ್ತು ಹಣಕ್ಕೆ ಒಂದೇ
ಸಮಯದಲ್ಲಿ ಸೇವೆ ಮಾಡಲಾರೆ.

### ದೇವರ ರಾಜ್ಯಕ್ಕೆ ಪ್ರಥಮ ಸ್ಥಾನ

(ಲೂಕ 12:22-34)

25''ಆದ್ದರಿಂದ ನಿಮ್ಮ ಪ್ರಾಣಧಾರಣೆಗೆ ಬೇಕಾದ ಆಹಾರ
ಕ್ಕಾಗಲೀ ದೇಹಕ್ಕೆ ಬೇಕಾದ ಬಟ್ಟೆಗಾಗಲೀ ನೀವು ಚಿಂತಿಸ
ಬಾರದು. ಪ್ರಾಣವು ಆಹಾರಕ್ಕಿಂತಲೂ ದೇಹವು ಬಟ್ಟೆಗಿಂತಲೂ
ಬಹಳ ಮುಖ್ಯವಾದದ್ದೆಂದು ನಾನು ನಿಮಗೆ ಹೇಳುತ್ತೇನೆ. 26ಪಕ್ಷಿ
ಗಳ ಕಡೆಗೆ ನೋಡಿ. ಅವು ಬಿತ್ತುವುದಿಲ್ಲ ಕೊಯ್ಯುವುದಿಲ್ಲ
ಇಲ್ಲವೇ ಕಣಜಗಳಲ್ಲಿ ತುಂಬಿಟ್ಟುಕೊಳ್ಳುವುದಿಲ್ಲ. ಆದರೆ ಪರ
ಲೋಕದಲ್ಲಿರುವ ನಿಮ್ಮ ತಂದೆಯು ಅವುಗಳಿಗೆ ಆಹಾರವನ್ನು
ನೀಡುತ್ತಾನೆ. ನೀವು ಆ ಪಕ್ಷಿಗಳಿಗಿಂತ ಎಷ್ಟೋ ಅಮೂಲ್ಯ
ರೆಂಬುದು ನಿಮಗೆ ಗೊತ್ತಿದೆ. 27ನೀವು ಚಿಂತಿಸುವುದರಿಂದ ನಿಮ್ಮ
ಆಯುಷ್ಯ ಹೆಚ್ಚೇನೂ ಆಗುವುದಿಲ್ಲ.
28''ಬಟ್ಟೆಗಾಗಿ ಚಿಂತಿಸುವುದೇಕೆ? ಹೊಲದಲ್ಲಿರುವ
ಹೂವುಗಳನ್ನು ನೋಡಿ. ಅವು ಬೆಳೆಯುವ ಬಗೆಯನ್ನು ಗಮನಿಸಿ.
ಅವು ದುಡಿಯುವುದಿಲ್ಲ ಅಥವಾ ತಮಗಾಗಿ ಬಟ್ಟೆಗಳನ್ನು
ನೇಯುವುದಿಲ್ಲ. 29ಆದರೆ ನಾನು ನಿಮಗೆ ಹೇಳುವುದೇನೆಂದರೆ,
ಸೊಲೊಮೋನನು ತನ್ನ ವೈಭವದಿಂದ ಇದ್ದಾಗಲೂ ಈ
ಹೂವುಗಳಲ್ಲಿ ಒಂದಕ್ಕಿರುವಷ್ಟು ಸೌಂದರ್ಯವುಳ್ಳ ಬಟ್ಟೆಗಳನ್ನು
ಧರಿಸಲಿಲ್ಲ. 30ಬಯಲಿನಲ್ಲಿರುವ ಹುಲ್ಲಿಗೂ ದೇವರು ಹಾಗೆ
ಹೊದಿಸುತ್ತಾನೆ. ಹುಲ್ಲಾದರೊ ಈ ಹೊತ್ತು ಇದ್ದು ನಾಳೆ
ಬೆಂಕಿಯ ಪಾಲಾಗುತ್ತದೆ. ಆದ್ದರಿಂದ ದೇವರು ನಿಮಗೆ ಎಷ್ಟೋ
ಹೆಚ್ಚಾಗಿ ತೊಡಿಸುತ್ತಾನೆಂದು ನಿಮಗೆ ಗೊತ್ತಿದೆ. ಅಲ್ಪವಿಶ್ವಾಸಿ
ಗಳಾಗಿರಬೇಡಿ! 31'ನಾವು ಏನು ತಿನ್ನಬೇಕು ? ಏನು ಕುಡಿಯ
ಬೇಕು? ಏನನ್ನು ಧರಿಸಬೇಕು?' ಎಂದು ಚಿಂತಿಸಬೇಡಿ.
32ದೇವರನ್ನು ತಿಳಿಯದ ಜನರೆಲ್ಲರೂ ಇವುಗಳನ್ನು ಪಡೆಯಲು
ಪ್ರಯತ್ನಿಸುತ್ತಾರೆ. ಚಿಂತಿಸಬೇಡಿರಿ, ಏಕೆಂದರೆ ಈ ವಸ್ತುಗಳು
ನಿಮಗೆ ಅಗತ್ಯವೆಂದು ಪರಲೋಕದಲ್ಲಿರುವ ನಿಮ್ಮ ತಂದೆಗೆ
ತಿಳಿದಿದೆ. 33ಆದ್ದರಿಂದ ನೀವು ದೇವರ ರಾಜ್ಯಕ್ಕಾಗಿ ಮತ್ತು ಆತನ
ಚಿತ್ತಕ್ಕನುಸಾರವಾಗಿ ಕಾರ್ಯಗಳನ್ನು ಮಾಡಲು ಬಹಳ ತವಕ
ಪಡಬೇಕು. ಆಗ ನಿಮಗೆ ಅಗತ್ಯವಾದ ಉಳಿದವುಗಳನ್ನು ಸಹ
ಕೊಡಲಾಗುವುದು. 34ಆದ್ದರಿಂದ ನಾಳೆಗಾಗಿ ಚಿಂತಿಸಬೇಡಿ.
ಪ್ರತಿದಿನವು ತನ್ನದೇ ಆದ ಎಷ್ಟೋ ಕಷ್ಟಗಳನ್ನು ಹೊಂದಿರುತ್ತದೆ.
ನಾಳೆಯು ಸಹ ತನ್ನದೇ ಆದ ಚಿಂತೆಗಳನ್ನು ಹೊಂದಿದೆ.

### ಬೇರೆಯವರಿಗೆ ತೀರ್ಪು ಮಾಡುವುದರ ಕುರಿತು ಯೇಸುವಿನ ಉಪದೇಶ

(ಲೂಕ 6:37-38, 41-42)

7 ''ಬೇರೆಯವರಿಗೆ ತೀರ್ಪು ನೀಡಬೇಡಿ. ಆಗ ದೇವರೂ
ನಿಮಗೆ ತೀರ್ಪು ಮಾಡುವುದಿಲ್ಲ. 2ನೀವು ಬೇರೆಯವರಿಗೆ
ತೀರ್ಪು ಮಾಡಿದರೆ, ಅದೇ ಪ್ರಕಾರ ನಿಮಗೂ ತೀರ್ಪಾ
ಗುವುದು. ನೀವು ಬೇರೆಯವರನ್ನು ಕ್ಷಮಿಸಿದರೆ ನಿಮಗೂ ಕ್ಷಮೆ
ದೊರೆಯುವುದು. 3ನಿನ್ನ ಸ್ವಂತ ಕಣ್ಣಿನಲ್ಲಿ ಇರುವ ತೊಲೆಯನ್ನು
ನೀನು ನೋಡದೆ ನಿನ್ನ ಸಹೋದರನ ಕಣ್ಣಿನಲ್ಲಿರುವ ಅಣು
ವನ್ನು ಏಕೆ ನೋಡುವೆ? 4ನಿನ್ನ ಕಣ್ಣಿನಲ್ಲಿರುವ ಅಣುವನ್ನು ನಾನು
ಹೊರಗೆ ತೆಗೆಯಲೇ? ಎಂದು ನಿನ್ನ ಸಹೋದರನಿಗೆ ಹೇಳುವು
ದೇಕೆ? ಮೊದಲು ನಿನ್ನ ಕಣ್ಣನ್ನು ನೋಡಿಕೊ! ನಿನ್ನ ಕಣ್ಣಿನಲ್ಲಿ
ತೊಲೆ ಇನ್ನೂ ಇದೆ. 5ನೀನು ಕಪಟಿ! ನಿನ್ನ ಕಣ್ಣಿನಲ್ಲಿರುವ

ತೊಲೆಯನ್ನು ಹೊರಗೆ ತೆಗೆದು ಬಿಡು. ಆಗ ನಿನ್ನ ಸಹೋದರನ
ಕಣ್ಣಿನಲ್ಲಿರುವ ಅಣುವನ್ನು ಹೊರತೆಗೆಯಲು ನಿನಗೆ ಸ್ಪಷ್ಟವಾಗಿ
ಕಾಣುವುದು.
6‘‘ಪರಿಶುದ್ಧವಾದ ವಸ್ತುಗಳನ್ನು ನಾಯಿಗಳಿಗೆ
ಹಾಕಬೇಡಿ. ಅವು ಹಿಂದಕ್ಕೆ ತಿರುಗಿ ನಿಮ್ಮನ್ನು ಕಚ್ಚುತ್ತವೆ.
ಹಂದಿಗಳ ಮುಂದೆ ನಿಮ್ಮ ಮುತ್ತುಗಳನ್ನು ಎಸೆಯಬೇಡಿ. ಅವು
ಮುತ್ತುಗಳನ್ನು ತುಳಿದುಹಾಕುತ್ತವೆ.

### ಪ್ರಾರ್ಥನೆಯ ಫಲ

(ಲೂಕ 11:9-13)

7‘‘ ಬೇಡಿಕೊಳ್ಳಿರಿ, ಆಗ ದೇವರು ನಿಮಗೆ ಕೊಡುತ್ತಾನೆ.
ಹುಡುಕಿರಿ, ಆಗ ನೀವು ಕಂಡುಕೊಳ್ಳುವಿರಿ. ಬಾಗಿಲು ತಟ್ಟಿರಿ,
ಆಗ ಅದು ನಿಮಗೆ ತೆರೆಯುವುದು. 8ಹೌದು, ಕೇಳುತ್ತಲೇ ಇರು
ವವನು ಪಡೆದುಕೊಳ್ಳುತ್ತಾನೆ, ಹುಡುಕುತ್ತಲೇ ಇರುವವನು
ಕಂಡುಕೊಳ್ಳುತ್ತಾನೆ, ತಟ್ಟುತ್ತಲೇ ಇರುವವನಿಗೆ ಬಾಗಿಲು
ತೆರೆಯುತ್ತದೆ.
9‘‘ನಿಮ್ಮ ಮಗನು ರೊಟ್ಟಿಯನ್ನು ಕೇಳಿದರೆ ಕಲ್ಲನ್ನು
ಕೊಡುವಿರೊ? 10ಮೀನನ್ನು ಕೇಳಿದರೆ, ಹಾವನ್ನು
ಕೊಡುವಿರೊ? 11ನೀವು ದೇವರಂತೆ ಒಳ್ಳೆಯವರಲ್ಲ, ಕೆಟ್ಟ
ವರು. ಆದರೂ ನಿಮ್ಮ ಮಕ್ಕಳಿಗೆ ಒಳ್ಳೆಯ ವಸ್ತುಗಳನ್ನು ಕೊಡ
ಬೇಕೆಂಬುದು ನಿಮಗೆ ತಿಳಿದಿದೆ. ಹೀಗಿರಲಾಗಿ ಪರಲೋಕದ
ನಿಮ್ಮ ತಂದೆಯು ಸಹ ತನ್ನನ್ನು ಕೇಳುವವರಿಗೆ ಒಳ್ಳೆಯ ವಸ್ತು
ಗಳನ್ನು ನಿಶ್ಚಯವಾಗಿಯೂ ಕೊಡುತ್ತಾನೆ.

### ಬಹಳ ಮುಖ್ಯ ನಿಯಮ

12 ‘‘ನಿಮಗೆ ಬೇರೆಯವರು ಏನನ್ನು ಮಾಡಬೇಕೆಂದು ನೀವು
ಆಶಿಸುತ್ತೀರೋ ಅಂಥವುಗಳನ್ನೇ ನೀವು ಅವರಿಗೆ ಮಾಡಿರಿ.
ಇದು ಮೋಶೆಯ ಧರ್ಮಶಾಸ್ತ್ರದ ಮತ್ತು ಪ್ರವಾದಿಗಳ
ಬೋಧನೆಯ ಸಾರಾಂಶ.

### ನಿತ್ಯಜೀವದ ದಾರಿ ಕಷ್ಟಕರ

(ಲೂಕ 13:24)

13‘‘ಇಕ್ಕಟ್ಟಾದ ಬಾಗಿಲಿನ ಮೂಲಕ ಪರಲೋಕವನ್ನು
ಪ್ರವೇಶಿಸಿರಿ. ನರಕಕ್ಕೆ ಹೋಗುವ ದಾರಿ ದೊಡ್ಡದು; ಬಾಗಿಲು
ಬಹಳ ವಿಶಾಲ. ಅನೇಕ ಜನರು ಆ ಬಾಗಿಲಲ್ಲಿ ಪ್ರವೇಶಿಸುತ್ತಾರೆ.
14ಆದರೆ ನಿತ್ಯಜೀವಕ್ಕಿರುವ ಬಾಗಿಲು ಬಹಳ ಚಿಕ್ಕದು, ದಾರಿ
ಕಷ್ಟಕರ. ಕೆಲವರು ಮಾತ್ರ ಆ ಮಾರ್ಗವನ್ನು ಕಂಡುಕೊಳ್ಳುವರು.

### ಜನರ ನಡತೆಯನ್ನು ಗಮನಿಸಿ

(ಲೂಕ 6:43-44; 13:25-27)

15‘‘ಸುಳ್ಳುಪ್ರವಾದಿಗಳ ಬಗ್ಗೆ ಎಚ್ಚರವಾಗಿರಿ. ಅವರು ಕುರಿಗಳ
ಹಾಗೆ ಕಾಣಿಸಿಕೊಂಡು ನಿಮ್ಮ ಬಳಿಗೆ ಬರುತ್ತಾರೆ. ಆದರೆ ಅವರು
ತೋಳಗಳಂತೆ ನಿಜವಾಗಿಯೂ ಅಪಾಯಕಾರಿಗಳಾಗಿದ್ದಾರೆ.
16ಅವರ ಕ್ರಿಯೆಗಳಿಂದ ನೀವು ಅವರನ್ನು ತಿಳಿದುಕೊಳ್ಳುವಿರಿ.
ಮುಳ್ಳಿನ ಪೊದೆಗಳಲ್ಲಿ ದ್ರಾಕ್ಷಿಯು ಹೇಗೆ ದೊರೆಯುವು
ದಿಲ್ಲವೋ ಅದೇ ರೀತಿ ಒಳ್ಳೆಯವುಗಳು ಕೆಟ್ಟ ಜನಗಳಿಂದ
ಬರುವುದಿಲ್ಲ. ಅಂಜೂರವು ಮುಳ್ಳುಗಿಡಗಳಲ್ಲಿ ದೊರೆಯು
ವುದಿಲ್ಲ. 17ಅದೇ ರೀತಿ ಪ್ರತಿಯೊಂದು ಒಳ್ಳೆಯ ಮರವು ಒಳ್ಳೆಯ
ಫಲವನ್ನು ಕೊಡುತ್ತದೆ. ಕೆಟ್ಟ ಮರವು ಕೆಟ್ಟ ಫಲವನ್ನು
ಕೊಡುತ್ತದೆ. 18ಒಳ್ಳೆಯ ಮರವು ಕೆಟ್ಟ ಫಲವನ್ನು ಕೊಡುವುದಿಲ್ಲ
ಮತ್ತು ಕೆಟ್ಟ ಮರವು ಒಳ್ಳೆಯ ಫಲವನ್ನು ಕೊಡುವುದಿಲ್ಲ.
19ಒಳ್ಳೆಯ ಫಲವನ್ನು ಕೊಡದ ಪ್ರತಿಯೊಂದು ಮರವನ್ನು
ಕಡಿದು ಬೆಂಕಿಯಲ್ಲಿ ಎಸೆಯಲಾಗುವುದು. 20ಈ ಸುಳ್ಳು
ಬೋಧಕರನ್ನು ಅವರು ಕೊಡುವ ಫಲದಿಂದಲೇ (ಕಾರ್ಯ
ಗಳಿಂದಲೇ) ನೀವು ತಿಳಿದುಕೊಳ್ಳುವಿರಿ.
21‘‘‘ನಾನು ಪ್ರಭುವಿನವನು’ ಎಂದು ಹೇಳಿದ ಮಾತ್ರಕ್ಕೆ
ಮನುಷ್ಯನು ಪರಲೋಕರಾಜ್ಯಕ್ಕೆ ಪ್ರವೇಶಿಸಲು ಸಾಧ್ಯವಿಲ್ಲ.
ಪರಲೋಕದಲ್ಲಿರುವ ನನ್ನ ತಂದೆಯ ಇಷ್ಟದಂತೆ ಮಾಡುವವರೇ
ಪರಲೋಕರಾಜ್ಯಕ್ಕೆ ಪ್ರವೇಶಿಸುವರು. 22ಕೊನೆಯ ದಿನಗಳಲ್ಲಿ
ಅನೇಕರು ನನಗೆ, ‘ನೀನೇ ನಮ್ಮ ಪ್ರಭು! ನಿನ್ನ ವಿಷಯವಾಗಿ
ನಾವು ಬೋಧಿಸಿದೆವು. ನಿನ್ನ ಹೆಸರಿನ ಮೂಲಕ ದೆವ್ವಗಳನ್ನು
ಬಿಡಿಸಿದೆವು ಮತ್ತು ಅನೇಕ ಅದ್ಭುತಕಾರ್ಯಗಳನ್ನು ಮಾಡಿದೆವು’
ಎಂದು ಹೇಳುವರು. 23ಆದರೆ ನಾನು ಅವರಿಗೆ, ‘ಅಧರ್ಮಿಗಳೇ,
ನನ್ನಿಂದ ತೊಲಗಿರಿ. ನೀವು ಯಾರೋ ನನಗೆ ತಿಳಿಯದು’
ಎಂದು ಸ್ಪಷ್ಟವಾಗಿ ಹೇಳಿಬಿಡುವೆನು.

### ಬುದ್ಧಿವಂತ ಮತ್ತು ಬುದ್ಧಿಹೀನ

(ಲೂಕ 6:47-49)

24‘‘ನನ್ನ ಈ ಮಾತುಗಳನ್ನು ಕೇಳಿ ಅವುಗಳಿಗೆ ವಿಧೇಯ
ನಾಗಿರುವ ಪ್ರತಿಯೊಬ್ಬನೂ ತನ್ನ ಮನೆಯನ್ನು ಬಂಡೆಯ ಮೇಲೆ
ಕಟ್ಟಿದ ಬುದ್ಧಿವಂತನಿಗೆ ಹೋಲಿಕೆಯಾಗಿದ್ದಾನೆ. 25ಬಿರುಸಾದ
ಮಳೆಯು ಸುರಿದು ನೀರು ಮೇಲಕ್ಕೆ ಏರುತ್ತದೆ. ಗಾಳಿ ಬೀಸಿ ಆ
ಮನೆಗೆ ಬಡಿಯುತ್ತದೆ. ಆದರೆ ಆ ಮನೆಯನ್ನು ಬಂಡೆಯ ಮೇಲೆ
ಕಟ್ಟಿದ್ದರಿಂದ ಅದು ಬೀಳಲಿಲ್ಲ. 26ಆದರೆ ನನ್ನ ಮಾತುಗಳನ್ನು
ಕೇಳಿಯೂ ಅವುಗಳಿಗೆ ವಿಧೇಯನಾಗದವನು ಬುದ್ಧಿಹೀನ
ನಾಗಿದ್ದಾನೆ. ಆ ಬುದ್ಧಿಹೀನನು ಮರಳಿನ ಮೇಲೆ ತನ್ನ ಮನೆ
ಯನ್ನು ಕಟ್ಟಿದನು. 27ಬಿರುಸಾದ ಮಳೆ ಸುರಿದು ನೀರು ಮೇಲಕ್ಕೆ
ಏರಿತು, ಗಾಳಿ ಬೀಸಿ ಆ ಮನೆಗೆ ಬಡಿಯಿತು. ಆಗ ಆ ಮನೆಯು
ಕುಸಿದುಬಿತ್ತು.’’ 28ಯೇಸು ಉಪದೇಶಿಸಿದ ಈ ಸಂಗತಿಗಳನ್ನು
ಕೇಳಿ ಜನರು ಅತ್ಯಾಶ್ಚರ್ಯಪಟ್ಟರು. 29ಏಕೆಂದರೆ, ಆತನು
ಧರ್ಮೋಪದೇಶಕರಂತೆ ಉಪದೇಶಿಸದೆ ಅಧಿಕಾರವಿದ್ದವನಂತೆ
ಉಪದೇಶಿಸಿದನು.

### ಗುಣಮುಖನಾದ ಕುಷ್ಠರೋಗಿ

(ಮಾರ್ಕ 1:40-45; 5:12-16)

8 ಯೇಸು ಬೆಟ್ಟದಿಂದ ಕೆಳಗೆ ಇಳಿದು ಬಂದನು. ಜನರು
ಗುಂಪುಗುಂಪಾಗಿ ಆತನನ್ನು ಹಿಂಬಾಲಿಸಿದರು. 2ಆಗ ಒಬ್ಬ
ಕುಷ್ಠರೋಗಿಯು ಯೇಸುವಿನ ಬಳಿಗೆ ಬಂದನು. ಅವನು
ಯೇಸುವಿನ ಮುಂದೆ ಅಡ್ಡಬಿದ್ದು, ‘‘ಪ್ರಭುವೇ, ನೀನು ಇಷ್ಟ
ಪಟ್ಟರೆ ನನ್ನನ್ನು ಗುಣಪಡಿಸಬಲ್ಲೆ’’ ಎಂದನು.
3ಯೇಸು ಅವನನ್ನು ಮುಟ್ಟಿ, ‘‘ನಿನ್ನನ್ನು ಗುಣಪಡಿಸಲು ನನಗೆ
ಮನಸ್ಸಿದೆ, ಗುಣವಾಗು’’ ಎಂದನು. ಆ ಕ್ಷಣವೇ ಅವನ
ಕುಷ್ಠರೋಗ ವಾಸಿಯಾಯಿತು. 4ಯೇಸು ಅವನಿಗೆ, ‘‘ಇದು
ಹೇಗಾಯಿತೆಂಬುದನ್ನು ಯಾರಿಗೂ ಹೇಳಬೇಡ. ಈಗ ನೀನು
ಹೋಗಿ ಯಾಜಕನಿಗೆ ತೋರಿಸು. ಗುಣಹೊಂದಿದವರು

ಮೋಶೆಯ ಆಜ್ಞೆಗನುಸಾರವಾಗಿ ಕೊಡತಕ್ಕ ಕಾಣಿಕೆಯನ್ನು
ಅರ್ಪಿಸು. ನೀನು ಗುಣವಾದದ್ದಕ್ಕೆ ಅದು ಸಾಕ್ಷಿಯಾಗಿರುವುದು''
ಎಂದು ಹೇಳಿದನು.

### ಆರೋಗ್ಯ ಹೊಂದಿದ ಅಧಿಕಾರಿಯ ಸೇವಕ
(ಲೂಕ 7:1-10; ಯೋಹಾನ 4:43-54)

5 ಯೇಸು ಕಪೆರ್ನೌಮ್ ಪಟ್ಟಣಕ್ಕೆ ಹೊರಟು ಹೋದನು.
ಆತನು ಪಟ್ಟಣಕ್ಕೆ ಪ್ರವೇಶಿಸಿದಾಗ ಸೈನ್ಯದ ಅಧಿಕಾರಿಯೊಬ್ಬನು
ಬಂದು, 6 ''ಪ್ರಭುವೇ, ನನ್ನ ಸೇವಕನು ಕಾಯಿಲೆಯಿಂದ
ಹಾಸಿಗೆಯ ಮೇಲಿದ್ದಾನೆ. ಅವನು ಬಹಳ ನೋವಿನಿಂದ ನರಳು
ತ್ತಿದ್ದಾನೆ'' ಎಂದು ಸಹಾಯಕ್ಕಾಗಿ ಬೇಡಿಕೊಂಡನು.
7 ಯೇಸು ಆ ಅಧಿಕಾರಿಗೆ, ''ನಾನು ಬಂದು ಅವನನ್ನು
ಗುಣಪಡಿಸುತ್ತೇನೆ'' ಎಂದು ಹೇಳಿದನು. 8 ಅದಕ್ಕೆ ಆ ಅಧಿಕಾರಿ,
''ಪ್ರಭುವೇ, ನನ್ನ ಮನೆಗೆ ನೀನು ಬರುವಷ್ಟು ಯೋಗ್ಯತೆ
ನನಗಿಲ್ಲ. ಅವನಿಗೆ ಗುಣವಾಗಲಿ ಎಂದು ನೀನು ಆಜ್ಞಾಪಿಸಿದರೆ
ಸಾಕು, ಅವನಿಗೆ ಗುಣವಾಗುವುದು. 9 ನಾನು ಸಹ ಬೇರೆ
ಅಧಿಕಾರಿಗಳ ಅಧೀನದಲ್ಲಿದ್ದೇನೆ. ನನ್ನ ಅಧೀನದಲ್ಲಿ ಸಿಪಾಯಿ
ಗಳಿದ್ದಾರೆ. ನಾನು ಒಬ್ಬ ಸಿಪಾಯಿಗೆ 'ಹೋಗು' ಅಂದರೆ ಅವನು
ಹೋಗುತ್ತಾನೆ; ಮತ್ತೊಬ್ಬ ಸಿಪಾಯಿಗೆ 'ಬಾ' ಅಂದರೆ ಅವನು
ಬರುತ್ತಾನೆ. ನಾನು ನನ್ನ ಸೇವಕನಿಗೆ, 'ಇದನ್ನು ಮಾಡು' ಅಂದರೆ
ಅವನು ವಿಧೇಯತೆಯಿಂದ ಮಾಡುತ್ತಾನೆ. ನಿನಗೂ ಇದೇ
ರೀತಿಯ ಅಧಿಕಾರವಿದೆ ಎಂದು ನನಗೆ ಗೊತ್ತಿದೆ'' ಎಂದು
ಹೇಳಿದನು.
10 ಇದನ್ನು ಕೇಳಿ ಯೇಸುವಿಗೆ ಆಶ್ಚರ್ಯವಾಯಿತು. ಯೇಸು
ತನ್ನ ಸಂಗಡ ಇದ್ದವರಿಗೆ, ''ನಾನು ಇಸ್ರೇಲಿನಲ್ಲಿಯೂ ಸಹ ಇಷ್ಟು
ನಂಬಿಕೆಯುಳ್ಳ ವ್ಯಕ್ತಿಯನ್ನು ಕಾಣಲಿಲ್ಲ'' ಎಂದು ನಿಮಗೆ
ಸತ್ಯವಾಗಿ ಹೇಳುತ್ತೇನೆ'' ಎಂದನು. 11 ಅನೇಕ ಜನರು ಪೂರ್ವ
ಮತ್ತು ಪಶ್ಚಿಮ ದಿಕ್ಕುಗಳಿಂದ ಬರುತ್ತಾರೆ. ಅವರು ಪರಲೋಕ
ರಾಜ್ಯದಲ್ಲಿ ಅಬ್ರಹಾಮ, ಇಸಾಕ, ಯಾಕೋಬ ಇವರ ಸಂಗಡ
ಕುಳಿತುಕೊಂಡು ಊಟಮಾಡುತ್ತಾರೆ. 12 ಪರಲೋಕ ರಾಜ್ಯ
ವನ್ನು ಹೊಂದತಕ್ಕವರು ಹೊರಗೆ ಕತ್ತಲೆಗೆ ಎಸೆಯಲ್ಪಡುವರು.
ಅಲ್ಲಿ ಅವರು ಗೋಳಾಡುವರು ಮತ್ತು ನೋವಿನಿಂದ ಹಲ್ಲು
ಗಳನ್ನು ಕಡಿಯುವರು'' ಎಂದನು.
13 ಬಳಿಕ ಯೇಸು ಆ ಅಧಿಕಾರಿಗೆ, ''ಮನೆಗೆ ಹೋಗು, ನೀನು
ನಂಬಿದಂತೆಯೇ ನಿನ್ನ ಸೇವಕನಿಗೆ ಗುಣವಾಗುವುದು''
ಎಂದನು. ಅದೇ ಸಮಯದಲ್ಲಿ ಅವನ ಸೇವಕನಿಗೆ ಗುಣ
ವಾಯಿತು.

### ಗುಣಮುಖರಾದ ವಿವಿಧ ಜನರು
(ಮಾರ್ಕ 1:29-34; ಲೂಕ 4:38-41)

14 ಯೇಸುವು ಪೇತ್ರನ ಮನೆಗೆ ಹೋದನು. ಅಲ್ಲಿ ಪೇತ್ರನ
ಅತ್ತೆಯು ಬಹಳ ಜ್ವರದಿಂದ ಹಾಸಿಗೆಯಲ್ಲಿ ಮಲಗಿದ್ದನ್ನು
ಯೇಸು ನೋಡಿದನು. 15 ಯೇಸು ಅವಳ ಕೈ ಮುಟ್ಟಿದಾಗ
ಜ್ವರವು ಅವಳನ್ನು ಬಿಟ್ಟುಹೋಯಿತು. ಆಗ ಅವಳು ಮೇಲೆದ್ದು,
ಆತನ ಸೇವೆ ಮಾಡಿದಳು.
16 ಅಂದು ಸಾಯಂಕಾಲ ಜನರು ದೆವ್ವದಿಂದ ಪೀಡಿತರಾಗಿದ್ದ
ಅನೇಕರನ್ನು ಯೇಸುವಿನ ಬಳಿಗೆ ಕರೆದುಕೊಂಡು ಬಂದರು.
ಯೇಸುವು ಮಾತಿನಿಂದಲೇ ದೆವ್ವಗಳನ್ನು ಅವರಿಂದ ಓಡಿಸಿದನು;
ಕಾಯಿಲೆಯಾಗಿದ್ದ ಜನರೆಲ್ಲರನ್ನೂ ಗುಣಪಡಿಸಿದನು.

17 ''ಆತನು ನಮ್ಮ ಬೇನೆಗಳನ್ನು ತೆಗೆದುಕೊಂಡನು,
ನಮ್ಮ ರೋಗಗಳನ್ನು ಹೊತ್ತುಕೊಂಡನು.''
*ಯೆಶಾಯ 53:4*

ಎಂದು ಪ್ರವಾದಿಯಾದ ಯೆಶಾಯನು ಹೇಳಿದ್ದು ಇದರ
ಮೂಲಕ ನೆರವೇರಿತು.

### ಯೇಸುವನ್ನು ಹಿಂಬಾಲಿಸಿ
(ಲೂಕ 9:57-62)

18 ಯೇಸು ತನ್ನ ಸುತ್ತಲೂ ಇದ್ದ ಜನರೆಲ್ಲರನ್ನು ನೋಡಿ ತನ್ನ
ಶಿಷ್ಯರಿಗೆ ಸರೋವರದ ಆಚೆಯ ತೀರಕ್ಕೆ ಹೋಗುವಂತೆ
ಹೇಳಿದನು.
19 ಆಗ ಧರ್ಮೋಪದೇಶಕನು ಯೇಸುವಿನ ಬಳಿಗೆ ಬಂದು,
''ಬೋಧಕನೇ, ನೀನು ಯಾವ ಸ್ಥಳಕ್ಕೆ ಹೋದರೂ ನಾನು
ನಿನ್ನನ್ನು ಹಿಂಬಾಲಿಸುತ್ತೇನೆ'' ಎಂದನು.
20 ಯೇಸು ಅವನಿಗೆ, ''ನರಿಗಳಿಗೆ ಗುಹೆಗಳಿವೆ, ಪಕ್ಷಿಗಳಿಗೆ
ಗೂಡುಗಳಿವೆ. ಆದರೆ ಮನುಷ್ಯಕುಮಾರನಿಗೆ ತಲೆ ಇಡುವಷ್ಟು
ಸ್ಥಳವೂ ಇಲ್ಲ'' ಅಂದನು.
21 ಶಿಷ್ಯರಲ್ಲಿ ಒಬ್ಬನು ಯೇಸುವಿಗೆ, ''ನಾನು ಮೊದಲು
ಹೋಗಿ ನನ್ನ ತಂದೆಯ ಉತ್ತರಕ್ರಿಯೆಗಳನ್ನು ಮಾಡಿ ಬರಲು
ನನಗೆ ಅಪ್ಪಣೆಯಾಗಲಿ. ಆಮೇಲೆ ನಾನು ನಿನ್ನನ್ನು
ಹಿಂಬಾಲಿಸುತ್ತೇನೆ'' ಎಂದು ಹೇಳಿದನು.
22 ಆದರೆ ಯೇಸು ಅವನಿಗೆ, ''ಸತ್ತವರೇ ತಮ್ಮಲ್ಲಿ ಸತ್ತು
ಹೋದವರ ಉತ್ತರಕ್ರಿಯೆಗಳನ್ನು ಮಾಡಿಕೊಳ್ಳಲಿ, ನನ್ನನ್ನು
ಹಿಂಬಾಲಿಸು'' ಎಂದು ಹೇಳಿದನು.

### ಯೇಸುವಿನ ಆಜ್ಞೆಗೆ ಬಿರುಗಾಳಿಯ ವಿಧೇಯತೆ
(ಮಾರ್ಕ 4:35-41; ಲೂಕ 8:22-25)

23 ಯೇಸು ದೋಣಿಯೊಳಗೆ ಹೋದನು. ಆತನ ಶಿಷ್ಯರೂ
ಆತನೊಂದಿಗೆ ಹೋದರು. 24 ದೋಣಿಯು ದಡವನ್ನು ಬಿಟ್ಟ
ಮೇಲೆ ದೊಡ್ಡ ಬಿರುಗಾಳಿಯು ಸರೋವರದ ಮೇಲೆ ಪ್ರಾರಂಭ
ವಾಯಿತು. ಅಲೆಗಳು ದೋಣಿಯನ್ನು ಮುಚ್ಚಿಕೊಂಡವು. ಆದರೆ
ಯೇಸು ನಿದ್ರಿಸುತ್ತಿದ್ದನು.
25 ಯೇಸುವಿನ ಶಿಷ್ಯರು ಆತನ ಬಳಿಗೆ ಹೋಗಿ ಆತನನ್ನು
ಎಬ್ಬಿಸಿ, ''ಪ್ರಭುವೇ, ನಮ್ಮನ್ನು ರಕ್ಷಿಸು! ನಾವು
ಮುಳುಗುತ್ತಿದ್ದೇವೆ!'' ಎಂದು ಹೇಳಿದರು.
26 ಯೇಸು, ''ನೀವು ಭಯಪಡುವುದೇಕೆ? ನಿಮ್ಮಲ್ಲಿ ಸಾಕಷ್ಟು
ನಂಬಿಕೆಯಿಲ್ಲ'' ಎಂದು ಉತ್ತರಿಸಿ ಎದ್ದು ನಿಂತುಕೊಂಡು ಆ
ದೊಡ್ಡ ಬಿರುಗಾಳಿಗೂ ಅಲೆಗಳಿಗೂ ಆಜ್ಞಾಪಿಸಿದನು. ಆ
ಕೂಡಲೇ ಬಿರುಗಾಳಿ ನಿಂತುಹೋಯಿತು. ಸರೋವರ
ಪ್ರಶಾಂತವಾಯಿತು.
27 ಜನರೆಲ್ಲರೂ ಆಶ್ಚರ್ಯಪಟ್ಟರು. ''ಈತನು ಎಂತಹ
ಮನುಷ್ಯ? ಬಿರುಗಾಳಿ ಮತ್ತು ನೀರು ಈತನಿಗೆ ವಿಧೇಯ
ವಾಗುತ್ತವೆಯಲ್ಲಾ'' ಎಂದು ಮಾತಾಡಿಕೊಂಡರು.

### ದೆವ್ವದಿಂದ ಪೀಡಿತರಾಗಿದ್ದ ಇಬ್ಬರಿಗೆ ಬಿಡುಗಡೆ
(ಮಾರ್ಕ 5:1-20; ಲೂಕ 8:26-39)

28ಯೇಸು ಸರೋವರದ ಮತ್ತೊಂದು ತೀರದಲ್ಲಿದ್ದ
ಗದರೇನ ಪ್ರಾಂತ್ಯಕ್ಕೆ ಬಂದನು. ಅಲ್ಲಿ ದೆವ್ವಗಳಿಂದ ಪೀಡಿತ
ರಾಗಿದ್ದ ಇಬ್ಬರು ಯೇಸುವಿನ ಬಳಿಗೆ ಬಂದರು. ಅವರು
ಸಮಾಧಿಯ ಗವಿಗಳಲ್ಲಿ ವಾಸವಾಗಿದ್ದರು ಮತ್ತು ಬಹಳ
ಅಪಾಯಕಾರಿಗಳಾಗಿದ್ದರು. ಆದ್ದರಿಂದ ಜನರು ಆ ಮಾರ್ಗದಲ್ಲಿ
ಹೋಗುತ್ತಿರಲಿಲ್ಲ. 29ಅವರಿಬ್ಬರು ಯೇಸುವಿನ ಬಳಿಗೆ ಬಂದು,
''ನೀನು ನಮಗೆ ಏನು ಮಾಡಬೇಕೆಂದಿರುವೆ? ದೇವ
ಕುಮಾರನೇ, ನೇಮಿತ ಕಾಲಕ್ಕಿಂತ ಮುಂಚೆಯೇ ನಮ್ಮನ್ನು ಶಿಕ್ಷಿ
ಸಲು ಇಲ್ಲಿಗೆ ಬಂದೆಯಾ?'' ಎಂದು ಗಟ್ಟಿಯಾಗಿ ಕೂಗಿ
ಕೊಂಡರು. 30ಆ ಸ್ಥಳದ ಹತ್ತಿರ ಹಂದಿಗಳ ದೊಡ್ಡ ಗುಂಪು
ಮೇಯುತ್ತಿತ್ತು. 31ಆ ದೆವ್ವಗಳು, ''ನಾವು ಇವರಿಬ್ಬರನ್ನು ಬಿಟ್ಟು
ಹೋಗುವಂತೆ ನೀನು ಮಾಡಬೇಕೆಂದಿದ್ದರೆ, ದಯವಿಟ್ಟು
ನಮ್ಮನ್ನು ಆ ಹಂದಿಗಳೊಳಗೆ ಕಳುಹಿಸು'' ಎಂದು ಬೇಡಿ
ಕೊಂಡವು.

32ಯೇಸು ಅವುಗಳಿಗೆ, ''ಹೋಗಿ'' ಅಂದನು. ಆಗ ಆ
ದೆವ್ವಗಳು ಅವರಿಬ್ಬರನ್ನು ಬಿಟ್ಟು ಹಂದಿಗಳೊಳಗೆ ಹೋದವು.
ಕೂಡಲೇ ಹಂದಿಗಳೆಲ್ಲಾ ಗುಡ್ಡದ ಕೆಳಗೆ ಓಡಿ ಸರೋವರದಲ್ಲಿ
ಬಿದ್ದು ನೀರಿನಲ್ಲಿ ಮುಳುಗಿ ಹೋದವು. 33ಹಂದಿಗಳನ್ನು
ಮೇಯಿಸುತ್ತಿದ್ದವರು ಪಟ್ಟಣದೊಳಕ್ಕೆ ಓಡಿಹೋಗಿ ಹಂದಿ
ಗಳಿಗೂ ದೆವ್ವಗಳಿಂದ ಪೀಡಿತರಾಗಿದ್ದವರಿಗೂ ಸಂಭವಿಸಿದ್ದನ್ನು
ಜನರಿಗೆ ತಿಳಿಸಿದರು. 34ಆಗ ಪಟ್ಟಣದ ಜನರೆಲ್ಲರೂ ಯೇಸು
ವನ್ನು ನೋಡಲು ಹೋದರು. ಮತ್ತು ತಮ್ಮ ಸ್ಥಳವನ್ನು ಬಿಟ್ಟು
ಹೋಗಬೇಕೆಂದು ಅವರು ಆತನನ್ನು ಬೇಡಿಕೊಂಡರು.

### ಸ್ವಸ್ಥತೆಯನ್ನು ಹೊಂದಿದ ಪಾರ್ಶ್ವವಾಯು ರೋಗಿ
(ಮಾರ್ಕ 2:1-12; 5:17-26)

9 ಯೇಸು ದೋಣಿಯನ್ನು ಹತ್ತಿ ಸರೋವರವನ್ನು ದಾಟಿ ತನ್ನ
ಸ್ವಂತ ಊರಿಗೆ ಹೋದನು. 2ಕೆಲವರು ಒಬ್ಬ ಪಾರ್ಶ್ವ
ವಾಯು ರೋಗಿಯನ್ನು ಯೇಸುವಿನ ಬಳಿಗೆ ತಂದರು. ಅವನು
ತನ್ನ ಹಾಸಿಗೆಯ ಮೇಲೆ ಮಲಗಿದ್ದನು. ಯೇಸು ಈ ಜನರಲ್ಲಿದ್ದ
ದೊಡ್ಡ ನಂಬಿಕೆಯನ್ನು ಕಂಡು ಪಾರ್ಶ್ವವಾಯು ರೋಗಿಗೆ,
''ಯುವಕನೇ, ಸಂತೋಷ ಪಡು. ನಿನ್ನ ಪಾಪಗಳು ಕ್ಷಮಿಸ
ಲ್ಪಟ್ಟಿವೆ'' ಎಂದು ಹೇಳಿದನು.

3ಅಲ್ಲಿದ್ದ ಧರ್ಮೋಪದೇಶಕರು ಇದನ್ನು ಕೇಳಿ, ''ಇದು
ದೇವದೂಷಣೆ'' ಎಂದು ತಮ್ಮೊಳಗೆ ಅಂದುಕೊಂಡರು.

4ಅವರು ಹೀಗೆ ಆಲೋಚಿಸುತ್ತಿರುವುದು ಯೇಸುವಿಗೆ ತಿಳಿ
ದಿತ್ತು. ಆತನು ಅವರಿಗೆ, ''ನೀವು ಏಕೆ ದುರಾಲೋಚನೆ
ಮಾಡುತ್ತಿದ್ದೀರಿ? 5ಯಾವುದು ಸುಲಭ? ಈ ಪಾರ್ಶ್ವವಾಯು
ರೋಗಿಗೆ, 'ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ' ಎಂದು ಹೇಳು
ವುದೇ ಅಥವಾ 'ಮೇಲಕ್ಕೆದ್ದು ನಡೆ' ಎಂದು ಹೇಳುವುದೇ?
6ಆದರೆ ಮನುಷ್ಯಕುಮಾರನಿಗೆ ಪಾಪಗಳನ್ನು ಕ್ಷಮಿಸಲು
ಭೂಲೋಕದಲ್ಲಿ ಅಧಿಕಾರವಿದೆ ಎಂಬುದನ್ನು ನಾನು ನಿಮಗೆ
ನಿರೂಪಿಸುತ್ತೇನೆ'' ಎಂದನು. ನಂತರ ಯೇಸು ಪಾರ್ಶ್ವವಾಯು
ರೋಗಿಗೆ, ''ಎದ್ದುನಿಲ್ಲು, ನಿನ್ನ ಹಾಸಿಗೆಯನ್ನು ತೆಗೆದುಕೊಂಡು
ಮನೆಗೆ ಹೋಗು'' ಎಂದನು. 7ಆ ಮನುಷ್ಯನು ಎದ್ದುನಿಂತು
ಮನೆಗೆ ಹೋದನು. 8ಜನರು ಇದನ್ನು ನೋಡಿ ಆಶ್ಚರ್ಯ
ಚಕಿತರಾದರು. ಮನುಷ್ಯರಿಗೆ ಇಂಥ ಅಧಿಕಾರವನ್ನು ಕೊಟ್ಟಿ
ದ್ದಕ್ಕಾಗಿ ಜನರು ದೇವರನ್ನು ಕೊಂಡಾಡಿದರು.

### ಸುಂಕದವನು
(ಮಾರ್ಕ 2:13-17; ಲೂಕ 5:27-32)

9ಯೇಸು ಹೋಗುತ್ತಿರುವಾಗ, ಮತ್ತಾಯ ಎಂಬ ವ್ಯಕ್ತಿಯನ್ನು
ಕಂಡನು. ಮತ್ತಾಯನು ಸುಂಕದ ಕಟ್ಟೆಯಲ್ಲಿ ಕುಳಿತಿದ್ದನು.
ಯೇಸು ಅವನಿಗೆ, ''ನನ್ನನ್ನು ಹಿಂಬಾಲಿಸು'' ಅಂದನು. ಆಗ
ಮತ್ತಾಯನು ಎದ್ದು ಯೇಸುವನ್ನು ಹಿಂಬಾಲಿಸಿದನು.

10ಯೇಸು ಮತ್ತಾಯನ ಮನೆಯಲ್ಲಿ ಊಟಕ್ಕೆ ಕುಳಿತು
ಕೊಂಡನು. ಅನೇಕ ಮಂದಿ ಸುಂಕ ವಸೂಲಿಗಾರರು ಮತ್ತು
ಕೆಟ್ಟಜನರು ಸಹ ಯೇಸುವಿನ ಸಂಗಡ ಮತ್ತು ಆತನ ಹಿಂಬಾ
ಲಕರ ಸಂಗಡ ಊಟಕ್ಕೆ ಕುಳಿತುಕೊಂಡರು. 11ಇದನ್ನು ಕಂಡ
ಫರಿಸಾಯರು ಯೇಸುವಿನ ಶಿಷ್ಯರಿಗೆ, ''ನಿಮ್ಮ ಬೋಧಕನು
ಸುಂಕ ವಸೂಲಿಗಾರರೊಂದಿಗೆ ಮತ್ತು ಕೆಟ್ಟ ಜನರೊಂದಿಗೆ ಏಕೆ
ಊಟಮಾಡುತ್ತಾನೆ''ಎಂದು ಕೇಳಿದರು.

12ಫರಿಸಾಯರು ಹೇಳಿದ್ದನ್ನು ಕೇಳಿಸಿಕೊಂಡ ಯೇಸು
ಅವರಿಗೆ, ''ಆರೋಗ್ಯವುಳ್ಳ ಜನರಿಗೆ ವೈದ್ಯನ ಅವಶ್ಯಕತೆಯಿಲ್ಲ.
ಕಾಯಿಲೆಯ ಜನರಿಗೆ ವೈದ್ಯನು ಅವಶ್ಯ. 13ನೀವು ಹೋಗಿ,
'ನನಗೆ ಯಜ್ಞ ಬೇಡ, ದಯೆಬೇಕು'* ಎಂದು ಪವಿತ್ರ
ಗ್ರಂಥದಲ್ಲಿ ಬರೆದಿರುವ ವಾಕ್ಯದ ಅರ್ಥವನ್ನು ಕಲಿತುಕೊಳ್ಳಿ.
ನಾನು ನೀತಿವಂತರನ್ನು ಕರೆಯಲು ಬರಲಿಲ್ಲ, ಪಾಪಿಗಳನ್ನು
ಕರೆಯಲು ಬಂದೆನು''ಎಂದು ಹೇಳಿದನು.

### ಯೇಸು ಇತರ ಧಾರ್ಮಿಕ ಯೆಹೂದ್ಯರಂತಲ್ಲ
(ಮಾರ್ಕ 2:18-22; ಲೂಕ 5:33-39)

14ನಂತರ ಯೋಹಾನನ ಶಿಷ್ಯರು ಯೇಸುವಿನ ಬಳಿಗೆ
ಬಂದರು. ಅವರು ಯೇಸುವಿಗೆ, ''ನಾವು ಮತ್ತು ಫರಿಸಾಯರು
ಆಗಾಗ್ಗೆ ಉಪವಾಸ ಮಾಡುತ್ತೇವೆ. ಆದರೆ ನಿನ್ನ ಶಿಷ್ಯರು ಏಕೆ
ಉಪವಾಸ ಮಾಡುವುದಿಲ್ಲ?''ಎಂದು ಕೇಳಿದರು.

15ಯೇಸು, ''ಮದುವೆ ಸಮಯದಲ್ಲಿ ಮದುಮಗನ ಸಂಗಡ
ವಿರುವ ಅವನ ಸ್ನೇಹಿತರು ದುಃಖಪಡುವುದಿಲ್ಲ. ಆದರೆ ಮದು
ಮಗನು ಅವರನ್ನು ಬಿಟ್ಟುಹೋಗುವ ಸಮಯ ಬರುತ್ತದೆ. ಆಗ
ಅವರು ದುಃಖಪಡುತ್ತಾರೆ ಮತ್ತು ಉಪವಾಸ ಮಾಡುತ್ತಾರೆ.

16''ಒಬ್ಬನು ಹರಿದುಹೋದ ಹಳೆ ಮೇಲಂಗಿಗೆ ಹೊಸ
ಬಟ್ಟೆಯ ತುಂಡನ್ನು ತೇಪೆಹಾಕಿ ಹೊಲಿಯುವುದಿಲ್ಲ. ಒಂದು
ವೇಳೆ ಹೊಲಿದರೆ, ಆ ತೇಪೆಯು ಹಿಂಜಿಕೊಂಡು ಮೇಲಂಗಿ
ಯಿಂದ ಕಿತ್ತುಬರುವುದು. ಆಗ ಆ ಮೇಲಂಗಿಯು ಮತ್ತಷ್ಟು
ಹರಿದುಹೋಗುವುದು.

17ಇದಲ್ಲದೆ ಜನರು ಹೊಸ ದ್ರಾಕ್ಷಾರಸವನ್ನು ಹಳೆ
ದ್ರಾಕ್ಷಾರಸದ ಬುದ್ದಲಿಗಳಲ್ಲಿ ಹಾಕುವುದಿಲ್ಲ; ಏಕೆಂದರೆ ಹಳೆ
ಬುದ್ದಲಿಗಳು ಒಡೆದು ಹೋಗುತ್ತವೆ; ಮತ್ತು ದ್ರಾಕ್ಷಾರಸವು
ಚೆಲ್ಲಿಹೋಗುತ್ತದೆ. ಆದ್ದರಿಂದ ಜನರು ಯಾವಾಗಲೂ ಹೊಸ
ದ್ರಾಕ್ಷಾರಸವನ್ನು ಹೊಸ ಬುದ್ದಲಿಗಳಲ್ಲಿ ಹಾಕಿಡುವರು. ಆಗ
ಎರಡೂ ಉಳಿಯುತ್ತವೆ''ಅಂದನು.

---

**ನನಗೆ … ದಯೆಬೇಕು** ಹೋಶೇಯ 6:6

## ಮರುಜೀವ ಹೊಂದಿದ ಬಾಲಕಿ. ಗುಣಮುಖಳಾದ ಸ್ತ್ರೀ

(ಮಾರ್ಕ 5:21-43; ಲೂಕ 8:40-56)

18ಯೇಸು ಈ ಸಂಗತಿಗಳನ್ನು ಹೇಳುತ್ತಿರುವಾಗ
ಸಭಾಮಂದಿರದ ಅಧಿಕಾರಿಯೊಬ್ಬನು ಆತನ ಬಳಿಗೆ ಬಂದು
ಆತನಿಗೆ ಬಾಗಿ ನಮಸ್ಕರಿಸಿ, ''ನನ್ನ ಮಗಳು ಈಗ ತಾನೇ ಸತ್ತು
ಹೋದಳು. ನೀನು ಬಂದು ಅವಳನ್ನು ಮುಟ್ಟಿದರೆ ಅವಳು ಮತ್ತೆ
ಜೀವಂತಳಾಗುವಳು'' ಎಂದು ಹೇಳಿದನು.
19ಆದ್ದರಿಂದ ಯೇಸು ಎದ್ದು ಅಧಿಕಾರಿಯ ಸಂಗಡ
ಹೋದನು. ಯೇಸುವಿನ ಶಿಷ್ಯರು ಸಹ ಹೋದರು.
20ಹನ್ನೆರಡು ವರ್ಷಗಳಿಂದ ರಕ್ತಸ್ರಾವ ಕಾಯಿಲೆ ಹೊಂದಿದ್ದ
ಒಬ್ಬ ಹೆಂಗಸು ಅಲ್ಲಿದ್ದಳು. ಆ ಹೆಂಗಸು ಯೇಸುವಿನ ಹಿಂದೆಯೇ
ಬಂದು ಆತನ ಮೇಲಂಗಿಯ ತುದಿಯನ್ನು ಮುಟ್ಟಿದಳು.
21ಆ ಹೆಂಗಸು, ''ನಾನು ಆತನ ಅಂಗಿಯನ್ನು ಮುಟ್ಟಿದರೆ,
ನಾನು ಗುಣವಾಗಬಲ್ಲೆ'' ಎಂದು ಆಲೋಚನೆ ಮಾಡಿ
ಕೊಂಡಿದ್ದಳು.
22ಯೇಸು ಹಿಂತಿರುಗಿ ಆ ಹೆಂಗಸನ್ನು ನೋಡಿ, ''ಮಗಳೇ,
ಸಂತೋಷಪಡು ! ನಿನ್ನ ನಂಬಿಕೆಯಿಂದಲೇ ಗುಣವಾಯಿತು''
ಎಂದು ಹೇಳಿದನು. ಆಗ ಅವಳು ಗುಣಮುಖಳಾದಳು.
23ಬಳಿಕ ಯೇಸು ಅಧಿಕಾರಿಯೊಡನೆ ಮುಂದೆ ಸಾಗಿ ಅವನ
ಮನೆಯೊಳಕ್ಕೆ ಹೋದನು. ಶವಸಂಸ್ಕಾರಕ್ಕಾಗಿ ಬಂದಿದ್ದ ವಾದ್ಯ
ವೃಂದದವರಿಗೂ ಗೋಳಾಡುತ್ತಿದ್ದವರಿಗೂ ಯೇಸು, 24''ದೂರ
ಹೋಗಿರಿ, ಹುಡುಗಿ ಸತ್ತಿಲ್ಲ. ಅವಳು ನಿದ್ದೆ ಮಾಡುತ್ತಿದ್ದಾಳೆ''
ಅಂದನು. ಆದರೆ ಅವರು ಯೇಸುವನ್ನು ಅಪಹಾಸ್ಯ ಮಾಡಿದರು.
25ಜನರನ್ನು ಮನೆಯ ಹೊರಗೆ ಕಳುಹಿಸಿದ ಮೇಲೆ ಯೇಸು
ಹುಡುಗಿಯ ಕೋಣೆಯ ಒಳಗೆ ಹೋದನು. ಯೇಸು
ಹುಡುಗಿಯ ಕೈಯನ್ನು ಹಿಡಿದುಕೊಂಡಾಗ ಆ ಹುಡುಗಿಯು
ಎದ್ದುನಿಂತಳು. 26ಈ ಸುದ್ದಿಯು ಸುತ್ತಮುತ್ತಲಿನ ಪ್ರದೇಶ
ದಲ್ಲೆಲ್ಲಾ ಹಬ್ಬಿತು.

## ಅನೇಕರಿಗೆ ಸ್ವಸ್ಥತೆ

27ಯೇಸು ಅಲ್ಲಿಂದ ಹೊರಡುತ್ತಿರುವಾಗ ಇಬ್ಬರು
ಕುರುಡರು ಆತನನ್ನು ಹಿಂಬಾಲಿಸಿದರು. ಅವರು ''ದಾವೀದನ
ಕುಮಾರನೇ, ನಮಗೆ ದಯೆ ತೋರು'' ಎಂದು ಗಟ್ಟಿಯಾಗಿ
ಕೂಗಿದರು.
28ಯೇಸು ಮನೆಯೊಳಗೆ ಹೋದನು. ಕುರುಡರೂ ಆತನ
ಸಂಗಡ ಹೋದರು. ಯೇಸು ಅವರಿಗೆ, ''ನಾನು ನಿಮ್ಮನ್ನು ಗುಣ
ಪಡಿಸಬಲ್ಲೆನೆಂದು ನೀವು ನಂಬುತ್ತೀರೋ?'' ಎಂದು ಕೇಳಿ
ದನು. ಕುರುಡರು, ''ಹೌದು ಪ್ರಭುವೇ, ನಾವು ನಂಬುತ್ತೇವೆ''
ಎಂದು ಉತ್ತರ ಕೊಟ್ಟರು.
29ಆಗ ಯೇಸು ಅವರ ಕಣ್ಣುಗಳನ್ನು ಮುಟ್ಟಿ, ''ನೀವು
ನಂಬಿದಂತೆಯೇ ನಿಮಗೆ ಗುಣವಾಗಲಿ'' ಅಂದನು. 30ಕೂಡಲೇ
ಅವರಿಗೆ ದೃಷ್ಟಿ ಬಂದಿತು. ''ಈ ವಿಷಯವನ್ನು ಯಾರಿಗೂ
ಹೇಳಬಾರದು'' ಎಂದು ಯೇಸು ಅವರಿಗೆ ಎಚ್ಚರಿಕೆ ನೀಡಿದನು.
31ಆದರೆ ಆ ಕುರುಡರು ಅಲ್ಲಿಂದ ಹೊರಟುಹೋಗಿ ಯೇಸು
ವಿನ ಸುದ್ದಿಯನ್ನು ಆ ಪ್ರದೇಶದ ಸುತ್ತಮುತ್ತಲೆಲ್ಲಾ ಹಬ್ಬಿಸಿದರು.
32ಅವರಿಬ್ಬರು ಹೋಗುತ್ತಿರುವಾಗ ಕೆಲವರು ಬೇರೊಬ್ಬ
ನನ್ನು ಯೇಸುವಿನ ಬಳಿಗೆ ತಂದರು. ಅವನಲ್ಲಿ ದೆವ್ವವಿದ್ದುದ
ರಿಂದ ಅವನು ಮೂಕನಾಗಿದ್ದನು. 33ಯೇಸು ಆ ದೆವ್ವಕ್ಕೆ
ಅವನನ್ನು ಬಿಟ್ಟುಹೋಗುವಂತೆ ಆಜ್ಞಾಪಿಸಿದನು. ಅವನು
ಮಾತನಾಡತೊಡಗಿದನು. ಇದನ್ನು ಕಂಡ ಜನರು ಆಶ್ಚರ್ಯ
ಚಕಿತರಾಗಿ, ''ಇಸ್ರೇಲಿನಲ್ಲಿ ಇಂಥ ಕಾರ್ಯವನ್ನು ನೋಡಿಯೇ
ಇಲ್ಲ'' ಅಂದರು. 34ಆದರೆ ಫರಿಸಾಯರು, ''ಇವನು ದೆವ್ವಗಳ
ಒಡೆಯನ ಶಕ್ತಿಯಿಂದಲೇ ದೆವ್ವಗಳನ್ನು ಬಿಡಿಸುತ್ತಾನೆ.''
ಎಂದರು.

## ಜನರ ವಿಷಯದಲ್ಲಿ ಯೇಸುವಿನ ದುಃಖ

35ಯೇಸು ಊರುಗಳಲ್ಲೆಲ್ಲಾ ಮತ್ತು ಹಳ್ಳಿಗಳಲ್ಲೆಲ್ಲಾ
ಸಂಚಾರ ಮಾಡಿದನು. ಯೇಸು ಅವರ ಸಭಾಮಂದಿರಗಳಲ್ಲಿ
ಉಪದೇಶಿಸಿ ಪರಲೋಕರಾಜ್ಯದ ವಿಷಯವಾಗಿ ಶುಭವಾರ್ತೆ
ಯನ್ನು ಹೇಳಿದನು. ಎಲ್ಲಾ ತರದ ರೋಗಗಳನ್ನು, ಬೇನೆಗಳನ್ನು
ವಾಸಿಮಾಡಿದನು. 36ನೋವಿನಿಂದ ನರಳುತ್ತಿದ್ದ ಮತ್ತು
ಅಸಹಾಯಕರಾಗಿದ್ದ ಅನೇಕ ಜನರನ್ನು ಯೇಸು ನೋಡಿ
ದುಃಖಪಟ್ಟನು. ಕುರುಬನಿಲ್ಲದ ಕುರಿಗಳಂತೆ ಅವರಿದ್ದರು.
37ಯೇಸು ತನ್ನ ಶಿಷ್ಯರಿಗೆ, ''ಬೆಳೆಯು ಬಹಳ, ಆದರೆ
ಕೆಲಸಗಾರರು ಸ್ವಲ್ಪ. 38ಬೆಳೆಯ ಯಜಮಾನ ದೇವರೇ.
ಆದ್ದರಿಂದ ಹೆಚ್ಚು ಕೆಲಸಗಾರರನ್ನು ಸುಗ್ಗಿಗಾಗಿ ಕಳುಹಿಸಿ
ಕೊಡುವಂತೆ ಆತನಿಗೆ ಪ್ರಾರ್ಥನೆ ಮಾಡಿರಿ'' ಎಂದು ಹೇಳಿದನು.

## ಯೇಸು ಅಪೊಸ್ತಲರಿಗೆ ಕೊಟ್ಟ ಆದೇಶ

(ಮಾರ್ಕ 3:13-19; 6:7-13; ಲೂಕ 6:12-16; 9:1-6)

10 ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ಒಟ್ಟಿಗೆ
ಕರೆದು, ಅವರಿಗೆ ದುರಾತ್ಮಗಳನ್ನು ಬಿಡಿಸುವುದಕ್ಕೂ
ಎಲ್ಲಾ ತರದ ವ್ಯಾಧಿ ಮತ್ತು ಕಾಯಿಲೆಗಳನ್ನು ವಾಸಿಮಾಡು
ವುದಕ್ಕೂ ಅಧಿಕಾರ ಕೊಟ್ಟನು. 2ಹನ್ನೆರಡು ಮಂದಿ ಅಪೊಸ್ತಲರ
ಹೆಸರುಗಳು ಹೀಗಿವೆ: ಸೀಮೋನ (ಪೇತ್ರನೆಂದು ಕರೆಯುತ್ತಾರೆ)
ಮತ್ತು ಇವನ ಸಹೋದರ ಅಂದ್ರೆಯ, ಜೆಬೆದಾಯನ ಮಗನಾದ
ಯಾಕೋಬ, ಅವನ ಸಹೋದರ ಯೋಹಾನ, 3ಫಿಲಿಪ್ಪ ಮತ್ತು
ಬಾರ್ತೊಲೊಮಾಯ, ತೋಮ, ಸುಂಕ ವಸೂಲಿಗಾರನಾಗಿದ್ದ
ಮತ್ತಾಯ ಅಲ್ಫಾಯನ ಮಗನಾದ ಯಾಕೋಬ, ತದ್ದಾಯ,
4ಯೆಹೂದ್ಯರ ರಾಜಕೀಯ ಪಂಗಡಕ್ಕೆ ಸೇರಿದ ಸಿಮೋನ,
ಮತ್ತು ಯೇಸುವನ್ನು ಶತ್ರುಗಳಿಗೆ ಒಪ್ಪಿಸಿದ ಇಸ್ಕರಿಯೋತ
ಯೂದ.
5ಯೇಸು ಈ ಹನ್ನೆರಡು ಅಪೊಸ್ತಲರಿಗೆ ಕೆಲವು ಆಜ್ಞೆಗಳನ್ನು
ನೀಡಿ ಪರಲೋಕ ರಾಜ್ಯವನ್ನು ಕುರಿತು ತಿಳಿಸುವುದಕ್ಕಾಗಿ
ಅವರನ್ನು ಕಳುಹಿಸಿದನು. ಯೇಸು ಅವರಿಗೆ ಹೇಳಿದ್ದೇನೆಂದರೆ:
''ಯೆಹೂದ್ಯರಲ್ಲದ ಜನರ ಬಳಿಗಾಗಲೀ ಸಮಾರ್ಯದವರು
ವಾಸಿಸುವ ಯಾವ ಊರಿಗಾಗಲೀ ಹೋಗಬೇಡಿ. 6ಆದರೆ
ತಪ್ಪಿಸಿಕೊಂಡ ಕುರಿಗಳಂತಿರುವ ಇಸ್ರೇಲರ ಬಳಿಗೆ ಹೋಗಿ,
7ಪರಲೋಕರಾಜ್ಯವು ಬೇಗನೆ ಬರುತ್ತದೆ ಎಂದು ಬೋಧಿಸಿ.
8ರೋಗಿಗಳನ್ನು ವಾಸಿಮಾಡಿರಿ. ಸತ್ತವರನ್ನು ಬದುಕಿಸಿರಿ. ಕುಷ್ಠ
ರೋಗಿಗಳನ್ನು ವಾಸಿಮಾಡಿರಿ. ಜನರನ್ನು ದೆವ್ವಗಳಿಂದ ಬಿಡಿಸಿರಿ.
ನಾನು ನಿಮಗೆ ಈ ಅಧಿಕಾರಗಳನ್ನು ಉಚಿತವಾಗಿ ಕೊಡುತ್ತೇನೆ.
ಆದ್ದರಿಂದ ಬೇರೆಯವರಿಗೆ ಉಚಿತವಾಗಿ ಸಹಾಯಮಾಡಿ.
9ನಿಮ್ಮೊಂದಿಗೆ ಹಣವನ್ನಾಗಲೀ ತಾಮ್ರ, ಬೆಳ್ಳಿ ಬಂಗಾರಗಳ

ನ್ನಾಗಲೀ ತೆಗೆದುಕೊಂಡು ಹೋಗಬೇಡಿ. 10ಚೀಲವನ್ನಾಗಲೀ
ಹೆಚ್ಚಿನ ಬಟ್ಟೆಗಳನ್ನಾಗಲೀ ಪಾದರಕ್ಷೆಗಳನ್ನಾಗಲೀ ಊರು
ಗೋಲುಗಳನ್ನಾಗಲೀ ತೆಗೆದುಕೊಂಡು ಹೋಗಬೇಡಿ. ಕೆಲಸ
ಗಾರನಿಗೆ ಅಗತ್ಯವಾದುವುಗಳನ್ನು ಒದಗಿಸಲಾಗುವುದು.
11“ನೀನು ಯಾವದೇ ಊರಿನೊಳಕ್ಕೆ ಅಥವಾ ನಗರಕ್ಕೆ
ಪ್ರವೇಶಿಸಿದಾಗ ಅಲ್ಲಿರುವ ಉತ್ತಮ ವ್ಯಕ್ತಿಯನ್ನು ಗುರುತಿಸಿ,
ನೀವು ಆ ಊರನ್ನು ಬಿಡುವ ತನಕ ಅವನ ಮನೆಯಲ್ಲೇ ತಂಗಿರಿ.
12ಆ ಮನೆಗೆ ನೀವು ಪ್ರವೇಶಿಸಿದಾಗ, ‘ನಿಮಗೆ ಶುಭವಾಗಲಿ’
ಎಂದು ಹೇಳಿರಿ. 13ಆ ಮನೆಯಲ್ಲಿರುವ ಜನರು ನಿಮ್ಮನ್ನು
ಸ್ವಾಗತಿಸಿದರೆ ನಿಮ್ಮ ಆಶೀರ್ವಾದಕ್ಕೆ ಅವರು ಯೋಗ್ಯರಾಗಿರು
ವುದರಿಂದ ಆ ಆಶೀರ್ವಾದವು ಅವರಿಗೆ ದೊರೆಯಲಿ. ಅವರು
ನಿಮ್ಮನ್ನು ಸ್ವಾಗತಿಸದಿದ್ದರೆ, ನಿಮ್ಮ ಆಶೀರ್ವಾದವು ನಿಮಗೇ
ಹಿಂತಿರುಗಿ ಬರಲಿ. 14ಒಂದು ಮನೆಯವರು ಅಥವಾ ಒಂದು
ಊರಿನವರು ನಿಮ್ಮನ್ನು ಸ್ವಾಗತಿಸದಿದ್ದರೆ ಇಲ್ಲವೇ ನಿಮ್ಮ
ಮಾತನ್ನು ಕೇಳದಿದ್ದರೆ ನೀವು ಆ ಸ್ಥಳವನ್ನು ಬಿಟ್ಟುಹೋಗುವಾಗ,
ನಿಮ್ಮ ಕಾಲಿಗೆ ಹತ್ತಿದ ಧೂಳನ್ನು ಝಾಡಿಸಿಬಿಡಿರಿ. 15ನ್ಯಾಯ
ವಿಚಾರಣೆಯ ದಿನದಲ್ಲಿ ಆ ಊರಿನ ಗತಿಯು ಸೊದೋಮ್
ಮತ್ತು ಗೊಮೋರಗಳಿಗಿಂತ ಬಹಳ ಕೆಟ್ಟದ್ದಾಗಿರುವುದು ಎಂದು
ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ.

### ಹಿಂಸೆಯ ಕುರಿತು ಯೇಸುವಿನ ಎಚ್ಚರಿಕೆ

(ಮಾರ್ಕ 13:9-13; ಲೂಕ 21:12-17)

16“ಕೇಳಿರಿ! ತೋಳಗಳ ನಡುವೆ ಕುರಿಗಳನ್ನು ಬಿಟ್ಟಂತೆ ನಾನು
ನಿಮ್ಮನ್ನು ಕಳುಹಿಸುತ್ತಿದ್ದೇನೆ. ಆದ್ದರಿಂದ ನೀವು ಹಾವುಗಳಂತೆ
ಸೂಕ್ಷ್ಮಬುದ್ಧಿಯುಳ್ಳವರಾಗಿರಿ, ಪಾರಿವಾಳಗಳಂತೆ ಯಾವ
ಹಾನಿಯನ್ನೂ ಮಾಡದಿರಿ. 17ಜನರ ವಿಷಯದಲ್ಲಿ ಎಚ್ಚರಿಕೆ
ಯಿಂದಿರಿ. ನಿಮ್ಮನ್ನು ಅವರು ಬಂಧಿಸಿ ನ್ಯಾಯಾಲಯಕ್ಕೆ ಕರೆದು
ಕೊಂಡು ಹೋಗುವರು. ಅವರು ತಮ್ಮ ಸಭಾಮಂದಿರಗಳಲ್ಲಿ
ನಿಮ್ಮನ್ನು ಕೊರಡೆಗಳಿಂದ ಹೊಡೆಯುವರು. 18ನಿಮ್ಮನ್ನು
ಅಧಿಕಾರಿಗಳ ಸಮ್ಮುಖಕ್ಕೂ ಅರಸುಗಳ ಸಮ್ಮುಖಕ್ಕೂ ಕರೆದು
ಕೊಂಡು ಹೋಗುವರು. ನನ್ನ ನಿಮಿತ್ತ ಜನರು ನಿಮಗೆ ಹೀಗೆ
ಮಾಡುವರು. ಆದರೆ ನೀವು ಆ ಅರಸರುಗಳಿಗೂ ಅಧಿಕಾರಿ
ಗಳಿಗೂ ಯಹೂದ್ಯರಲ್ಲದ ಜನರಿಗೂ ನನ್ನ ವಿಷಯವಾಗಿ
ಹೇಳುವಿರಿ. 19ನಿಮ್ಮನ್ನು ಬಂಧಿಸಿದಾಗ ನೀವು ಏನು ಮಾತಾಡ
ಬೇಕು, ಹೇಗೆ ಮಾತಾಡಬೇಕು ಎಂದು ಚಿಂತಿಸಬೇಡಿ. ನೀವು
ಹೇಳಬೇಕಾದುವುಗಳನ್ನು ಆ ಸಮಯದಲ್ಲಿ ನಿಮಗೆ ಅನುಗ್ರಹಿಸ
ಲಾಗುವುದು. 20ಮಾತಾಡುವವರು ನಿಜವಾಗಿಯೂ ನೀವಲ್ಲ.
ನಿಮ್ಮ ತಂದೆಯ ಆತ್ಮನೇ ನಿಮ್ಮ ಮೂಲಕ ಮಾತನಾಡುತ್ತಾನೆ.
21“ಸಹೋದರರು ಸ್ವಂತ ಸಹೋದರರಿಗೆ ವಿರೋಧವಾಗಿ
ತಿರುಗಿಬಿದ್ದು ಅವರನ್ನು ಮರಣ ದಂಡನೆಗೆ ಒಪ್ಪಿಸುವರು.
ತಂದೆಗಳು ತಮ್ಮ ಸ್ವಂತ ಮಕ್ಕಳಿಗೆ ವಿರೋಧವಾಗಿ ತಿರುಗಿಬಿದ್ದು
ಅವರನ್ನು ಮರಣದಂಡನೆಗೆ ಒಪ್ಪಿಸುವರು. 22ನೀವು ನನ್ನನ್ನು
ಹಿಂಬಾಲಿಸುವುದರಿಂದ ಜನರೆಲ್ಲರೂ ನಿಮ್ಮನ್ನು ದ್ವೇಷಿಸುತ್ತಾರೆ.
ಆದರೆ ಕಡೆಯವರೆಗೂ ತಾಳಿಕೊಳ್ಳುವವನು ರಕ್ಷಣೆ ಹೊಂದು
ವನು. 23ಒಂದು ಊರಿನಲ್ಲಿ ನಿಮ್ಮನ್ನು ಹಿಂಸಿಸಿದರೆ ಮತ್ತೊಂದು
ಊರಿಗೆ ಹೋಗಿ. ಮನುಷ್ಯಕುಮಾರನು ಪುನಃ ಬರುವುದಕ್ಕಿಂತ
ಮುಂಚೆ ನೀವು ಇಸ್ರೇಲರ ಊರುಗಳಿಗೆಲ್ಲಾ ಹೋಗು
ವುದನ್ನು ಮುಗಿಸಿರುವುದಿಲ್ಲ ಎಂದು ನಾನು ನಿಮಗೆ ಸತ್ಯವಾಗಿ
ಹೇಳುತ್ತೇನೆ.
24“ಶಿಷ್ಯನು ಗುರುವಿಗಿಂತ ಉತ್ತಮನಲ್ಲ. ಆಳು ತನ್ನ
ದಣಿಗಿಂತ ಉತ್ತಮನಲ್ಲ. 25ಶಿಷ್ಯನು ತನ್ನ ಗುರುವಿನಂತಾದರೆ
ಸಾಕು. ಆಳು ತನ್ನ ದಣಿಯಂತಾದರೆ ಸಾಕು. ಕುಟುಂಬದ
ಹಿರಿಯನನ್ನೇ ಬೆಲ್ಜೆಬೂಲ (ದೆವ್ವ) ಎಂದು ಕರೆದರೆ, ಆ
ಕುಟುಂಬದ ಇತರರನ್ನು ಮತ್ತಷ್ಟು ಕೆಟ್ಟ ಹೆಸರಿನಿಂದ
ಕರೆಯುವುದಿಲ್ಲವೇ?

### ಭಯಪಡಬೇಕಾದದ್ದು ದೇವರಿಗೆ, ಮನುಷ್ಯರಿಗಲ್ಲ

(ಲೂಕ 12:2-7)

26“ಆದಕಾರಣ ಆ ಜನರಿಗೆ ಹೆದರಬೇಡಿ. ಮರೆಯಾಗಿರುವ
ಪ್ರತಿಯೊಂದೂ ಬಹಿರಂಗವಾಗುವದು. ಗುಪ್ತವಾಗಿರುವ ಪ್ರತಿ
ಸಂಗತಿಯು ಬಯಲಾಗುವುದು. 27ನಾನು ಕತ್ತಲೆಯಲ್ಲಿ
(ರಹಸ್ಯವಾಗಿ) ಈ ಸಂಗತಿಗಳನ್ನು ನಿಮಗೆ ಹೇಳುತ್ತಿದ್ದೇನೆ.
ಆದರೆ ನೀವು ಈ ಸಂಗತಿಗಳನ್ನು ಬೆಳಕಿನಲ್ಲಿ ಹೇಳಬೇಕೆಂಬುದು
ನನ್ನ ಇಷ್ಟ. ನಾನು ಈ ವಿಷಯಗಳನ್ನು ನಿಮಗೆ ಮೆಲ್ಲಗೆ
ಹೇಳುತ್ತಿದ್ದೇನೆ. ಆದರೆ ನೀವು ಈ ವಿಷಯಗಳನ್ನು ಜನರಿಗೆಲ್ಲ
ಗಟ್ಟಿಯಾಗಿ ಹೇಳಿರಿ. 28ಜನರಿಗೆ ಹೆದರಬೇಡಿ. ಅವರು ಶರೀರ
ವನ್ನು ಮಾತ್ರ ಕೊಲ್ಲಬಹುದು. ಆತ್ಮವನ್ನು ಅವರು ಕೊಲ್ಲ
ಲಾರರು. ಶರೀರವನ್ನೂ ಆತ್ಮವನ್ನೂ ನರಕಕ್ಕೆ ಹಾಕಬಲ್ಲ
ದೇವರಿಗೆ ಭಯಪಡಿರಿ. 29ಮಾರುಕಟ್ಟೆಯಲ್ಲಿ ಎರಡು ಗುಬ್ಬಚ್ಚಿ
ಗಳನ್ನು ಒಂದು ನಾಣ್ಯಕ್ಕೆ* ಮಾರುತ್ತಾರೆ. ಆದರೆ ನಿಮ್ಮ
ತಂದೆಯು ಅಪ್ಪಣೆ ಕೊಡದ ಹೊರತು ಅವುಗಳಲ್ಲಿ ಒಂದಾ
ದರೂ ಸಾಯುವುದಿಲ್ಲ. 30ನಿಮ್ಮ ತಲೆಯಲ್ಲಿ ಎಷ್ಟು ಕೂದಲು
ಗಳು ಇವೆ ಎಂಬುದು ಸಹ ದೇವರಿಗೆ ತಿಳಿದಿದೆ. 31ಆದಕಾರಣ
ಹೆದರಬೇಡಿ. ನೀವು ಅನೇಕ ಗುಬ್ಬಚ್ಚಿಗಳಿಗಿಂತಲೂ ಹೆಚ್ಚು
ಬೆಲೆಯುಳ್ಳವರಾಗಿದ್ದೀರಿ.

### ನಿಮ್ಮ ನಂಬಿಕೆಯ ಕುರಿತು ಬಹಿರಂಗ ಸಾಕ್ಷಿ

(ಲೂಕ 12:8-9)

32ಒಬ್ಬನು ಬೇರೆಯವರ ಮುಂದೆ, ತಾನು ನನ್ನವನೆಂದು
ಹೇಳಿದರೆ, ನಾನು ಸಹ ಪರಲೋಕದಲ್ಲಿ ನನ್ನ ತಂದೆಯ ಮುಂದೆ
ಅವನನ್ನು ನನ್ನವನೆಂದು ಹೇಳುತ್ತೇನೆ. 33ಆದರೆ ಒಬ್ಬನು ಜನರ
ಮುಂದೆ, ತಾನು ನನ್ನವನಲ್ಲವೆಂದು ಹೇಳಿದರೆ, ನಾನು ಸಹ
ಪರಲೋಕದಲ್ಲಿ ನನ್ನ ತಂದೆಯ ಮುಂದೆ ಅವನು ನನ್ನವನಲ್ಲ
ವೆಂದು ಹೇಳುತ್ತೇನೆ. 34“ಭೂಲೋಕದಲ್ಲಿ ಶಾಂತಿಯನ್ನು
ಉಂಟುಮಾಡಲು ನಾನು ಬಂದಿದ್ದೇನೆಂದು ಯೋಚಿಸಬೇಡಿ.
ನಾನು ಶಾಂತಿಯನ್ನು ಉಂಟುಮಾಡಲು ಬರಲಿಲ್ಲ. ಖಡ್ಗ
ಹಾಕಲು ಬಂದಿದ್ದೇನೆ. 35–36ಈ ಪ್ರವಾದನೆ ನೆರವೇರುವಂತೆ
ಮಾಡಲು ನಾನು ಬಂದಿದ್ದೇನೆ:

> ‘ಒಬ್ಬನಿಗೆ ಅವನ ಮನೆಯವರೇ ವೈರಿಗಳಾಗುವರು.
> ಮಗನು ತಂದೆಗೆ, ಮಗಳು ತಾಯಿಗೆ, ಸೊಸೆಯು
> ಅತ್ತೆಗೆ ವೈರಿಗಳಾಗುವರು.’
>
> *ಮೀಕ 7:6*

---

**ನಾಣ್ಯ** ತಾಮ್ರದ ನಾಣ್ಯ. ದಿನಾರಿಯಲ್ಲಿ ಹದಿನಾರನೆ ಒಂದು ಭಾಗ.

37‘‘ಯಾರಾದರೂ ನನ್ನನ್ನು ಪ್ರೀತಿಸುವದಕ್ಕಿಂತ ಹೆಚ್ಚಾಗಿ ತನ್ನ
ತಂದೆ ಅಥವಾ ತಾಯಿಯನ್ನು ಪ್ರೀತಿಸಿದರೆ, ಅವನು ನನ್ನ
ಹಿಂಬಾಲಕನಾಗಲು ಯೋಗ್ಯನಲ್ಲ. ಯಾವನಾದರೂ ನನ್ನನ್ನು
ಪ್ರೀತಿಸುವುದಕ್ಕಿಂತ ಹೆಚ್ಚಾಗಿ ತನ್ನ ಮಗನನ್ನು ಇಲ್ಲವೆ ಮಗಳನ್ನು
ಪ್ರೀತಿಸಿದರೆ, ಅವನು ನನ್ನ ಹಿಂಬಾಲಕನಾಗಲು ಯೋಗ್ಯನಲ್ಲ.
38ಯಾವನಾದರೂ ನನ್ನನ್ನು ಹಿಂಬಾಲಿಸುವಾಗ ಅವನಿಗೆ
ಕೊಡುವಂಥ ಶಿಲುಬೆಯನ್ನು (ಸಂಕಟವನ್ನು) ಅಂಗೀಕರಿಸ
ದಿದ್ದರೆ, ಅವನು ನನ್ನ ಹಿಂಬಾಲಕನಾಗಲು ಯೋಗ್ಯನಲ್ಲ.
39ನನ್ನನ್ನು ಪ್ರೀತಿಸುವುದಕ್ಕಿಂತ ಹೆಚ್ಚಾಗಿ ತನ್ನ ಪ್ರಾಣವನ್ನು
ಪ್ರೀತಿಸುವವನು ಅದನ್ನು ಕಳೆದುಕೊಳ್ಳುತ್ತಾನೆ. ನನಗಾಗಿ ತನ್ನ
ಪ್ರಾಣವನ್ನು ಕಳೆದುಕೊಳ್ಳುವವನು ಅದನ್ನು ಪಡೆದು
ಕೊಳ್ಳುವನು. 40ನಿಮ್ಮನ್ನು ಅಂಗೀಕರಿಸುವವನು ನನ್ನನ್ನು ಸಹ
ಅಂಗೀಕರಿಸುವನು. ನನ್ನನ್ನು ಅಂಗೀಕರಿಸುವವನು ನನ್ನನ್ನು
ಕಳುಹಿಸಿದಾತನನ್ನು (ದೇವರನ್ನು) ಸಹ ಅಂಗೀಕರಿಸುವನು.
41ಪ್ರವಾದಿಯನ್ನು ಪ್ರವಾದಿಯೆಂದು ಸಂಧಿಸಿ ಸ್ವಾಗತಿಸುವವನು
ಆ ಪ್ರವಾದಿಗೆ ಬರತಕ್ಕ ಪ್ರತಿಫಲವನ್ನು ಪಡೆಯುವನು.
ಸತ್ಪುರುಷನನ್ನು ಸತ್ಪುರುಷನೆಂದು ಸ್ವಾಗತಿಸುವವನು ಆ
ಸತ್ಪುರುಷನಿಗೆ ಬರತಕ್ಕ ಪ್ರತಿಫಲವನ್ನು ಪಡೆಯುವನು. 42ದೀನ
ರಾದ ಇವರಿಗೆ ನನ್ನ ಹಿಂಬಾಲಕರೆಂಬ ನಿಮಿತ್ತ ಸಹಾಯ
ಮಾಡುವವನು ಖಂಡಿತವಾಗಿಯೂ ಪ್ರತಿಫಲವನ್ನು ಪಡೆಯು
ವನು. ನನ್ನ ಹಿಂಬಾಲಕರಿಗೆ ಕೇವಲ ಒಂದು ಬಟ್ಟಲು ತಣ್ಣೀರನ್ನು
ಕೊಟ್ಟರೂ ಸಹ ಅದಕ್ಕೆ ಬರತಕ್ಕ ಪ್ರತಿಫಲವು ತಪ್ಪುವುದೇ ಇಲ್ಲ.’’

### ಶ್ರೇಷ್ಠನಾದ ಸ್ನಾನಿಕ ಯೋಹಾನ
(ಲೂಕ 7:18-35)

11 ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರಿಗೆ ಈ
ಸಂಗತಿಗಳನ್ನು ಹೇಳಿದ ನಂತರ ಅಲ್ಲಿಂದ ಹೊರಟು
ಬೋಧಿಸುವುದಕ್ಕೆ ಮತ್ತು ಉಪದೇಶಿಸುವುದಕ್ಕೆ ಗಲಿಲಾಯ
ಪಟ್ಟಣಕ್ಕೆ ಹೋದನು.
2ಸ್ನಾನಿಕನಾದ ಯೋಹಾನನು ಸೆರೆಯಲ್ಲಿದ್ದನು. ಕ್ರಿಸ್ತನು
ಮಾಡುತ್ತಿದ್ದ ಸಂಗತಿಗಳು ಅವನಿಗೆ ತಿಳಿಯಿತು. ಆದ್ದರಿಂದ
ಯೋಹಾನನು ತನ್ನ ಕೆಲವು ಶಿಷ್ಯರನ್ನು ಯೇಸುವಿನ ಬಳಿಗೆ
ಕಳುಹಿಸಿದನು. 3ಯೋಹಾನನ ಶಿಷ್ಯರು ಯೇಸುವಿಗೆ,
‘‘ಯೋಹಾನನು ಹೇಳಿದ್ದಂತೆ ಬರಬೇಕಾಗಿದ್ದವನು ನೀನೋ
ಅಥವಾ ಬೇರೊಬ್ಬನಿಗಾಗಿ ನಾವು ಎದುರು ನೋಡ
ಬೇಕೋ?’’ ಎಂದು ಕೇಳಿದರು.
4ಅದಕ್ಕೆ ಯೇಸು, ‘‘ನೀವು ಇಲ್ಲಿ ಕೇಳಿದ ಮತ್ತು ನೋಡಿದ
ಸಂಗತಿಗಳನ್ನು ಯೋಹಾನನಿಗೆ ತಿಳಿಸಿರಿ. 5ಕುರುಡರು ದೃಷ್ಟಿ
ಹೊಂದುತ್ತಾರೆ; ಕುಂಟರು ಮತ್ತೆ ನಡೆದಾಡಲು ಸಮರ್ಥರಾಗು
ತ್ತಾರೆ; ಕುಷ್ಟರೋಗಿಗಳು ಗುಣಹೊಂದುತ್ತಾರೆ. ಕಿವುಡರು
ಕೇಳಲು ಸಮರ್ಥರಾಗುತ್ತಾರೆ; ಸತ್ತವರು ಜೀವವನ್ನು ಹೊಂದು
ತ್ತಾರೆ. ಮತ್ತು ಬಡಜನರಿಗೆ ಶುಭವಾರ್ತೆಗಳನ್ನು ಹೇಳಲಾಗು
ತ್ತದೆ. 6ನನ್ನನ್ನು ಸ್ವೀಕರಿಸಿಕೊಳ್ಳುವವನು ಧನ್ಯನಾಗಿದ್ದಾನೆ.’’
ಎಂದು ಉತ್ತರ ಕೊಟ್ಟನು.
7ಯೋಹಾನನ ಶಿಷ್ಯರು ಹೊರಟುಹೋಗುತ್ತಿರಲು
ಯೇಸುವು ಜನರೊಡನೆ ಯೋಹಾನನನ್ನು ಕುರಿತು ಮಾತನಾ
ಡಲು ಪ್ರಾರಂಭಿಸಿದನು. ಯೇಸು, ‘‘ನೀವು ಏನು ನೋಡ
ಬೇಕೆಂದು ಅಡವಿಗೆ ಹೋಗಿದ್ದಿರಿ? ಗಾಳಿಯಿಂದ ಅಲ್ಲಾಡುವ
ದಂಟನ್ನೋ? ಇಲ್ಲ! 8ನಿಜವಾಗಿಯೂ ನೀವು ಏನನ್ನು ನೋಡು
ವುದಕ್ಕೆ ಹೋಗಿದ್ದಿರಿ? ನಯವಾದ ಉಡುಪನ್ನು ಹಾಕಿ
ಕೊಂಡಿರುವ ಮನುಷ್ಯನನ್ನೋ? ಇಲ್ಲ! ನಯವಾದ ಉಡು
ಪನ್ನು ಹಾಕಿಕೊಂಡಿರುವ ಜನರು ರಾಜರ ಅರಮನೆಗಳಲ್ಲಿ
ವಾಸಿಸುತ್ತಾರೆ. 9ಹಾಗಾದರೆ, ಏನನ್ನು ನೋಡಲು ಹೋಗಿದ್ದಿರಿ?
ಒಬ್ಬ ಪ್ರವಾದಿಯನ್ನೋ? ಹೌದು! ಯೋಹಾನನು ಪ್ರವಾದಿ
ಗಿಂತಲೂ ಹೆಚ್ಚಿನವನು ಎಂದು ನಾನು ನಿಮಗೆ ಹೇಳುತ್ತೇನೆ.
10ಯೋಹಾನನನ್ನು ಕುರಿತು ಪವಿತ್ರ ಗ್ರಂಥದಲ್ಲಿ ಹೀಗೆ ಬರೆದಿದೆ:

‘ಇಗೋ! ನಾನು (ದೇವರು) ನನ್ನ ದೂತನನ್ನು
ನಿನಗಿಂತ ಮೊದಲು ಕಳುಹಿಸುತ್ತೇನೆ. ಅವನು
ನಿನಗೆ ದಾರಿಯನ್ನು ಸಿದ್ಧಮಾಡುತ್ತಾನೆ’
*ಮಲಾಕಿ 3:1*

11‘‘ಸ್ನಾನಿಕ ಯೋಹಾನನು ಹಿಂದೆ ಜೀವಿಸಿದ್ದವರಿಗಿಂತ
ದೊಡ್ಡವನು. ಆದರೆ ಪರಲೋಕರಾಜ್ಯದಲ್ಲಿರುವ ಚಿಕ್ಕವನು ಸಹ
ಯೋಹಾನನಿಗಿಂತಲೂ ಹೆಚ್ಚಿನವನಾಗಿದ್ದಾನೆಂದು ನಾನು
ನಿಮಗೆ ಸತ್ಯವಾಗಿ ಹೇಳುತ್ತೇನೆ. 12ಸ್ನಾನಿಕ ಯೋಹಾನನು ಬಂದ
ಸಮಯದಿಂದ ಇಲ್ಲಿಯವರೆಗೂ ಪರಲೋಕರಾಜ್ಯ ಪ್ರಬಲ
ವಾದ ಆಕ್ರಮಣಗಳಿಗೆ ಒಳಗಾಗಿದೆ. ಬಲಾತ್ಕಾರವನ್ನು
ಉಪಯೋಗಿಸಿ ಜನರು ರಾಜ್ಯವನ್ನು ಪಡೆದುಕೊಳ್ಳುವದಕ್ಕಾಗಿ
ಪ್ರಯತ್ನಿಸುತ್ತಾರೆ. 13ಎಲ್ಲಾ ಪ್ರವಾದನೆಗಳು ಮತ್ತು ಮೋಶೆಯ
ಧರ್ಮಶಾಸ್ತ್ರವು ಯೋಹಾನನು ಬರುವ ತನಕ ಪರಲೋಕ
ರಾಜ್ಯದ ಕುರಿತಾಗಿ ಮುಂತಿಳಿಸಿದವು. 14ಧರ್ಮಶಾಸ್ತ್ರವನ್ನು
ಮತ್ತು ಪ್ರವಾದಿಗಳು ಹೇಳಿದ್ದನ್ನು ನೀವು ನಂಬುವುದಾದರೆ ಈ
ಯೋಹಾನನೇ ಎಲೀಯನು. ಅವನು ಬರುತ್ತಾನೆಂದು ಧರ್ಮ
ಶಾಸ್ತ್ರವೂ ಹೇಳಿದೆ. 15ಜನರೇ, ನಾನು ಹೇಳುವದನ್ನು ಕೇಳಿರಿ.
ಆಲಿಸಿರಿ!
16‘‘ಈ ಕಾಲದ ಜನರನ್ನು ಕುರಿತು ನಾನು ಏನು ಹೇಳಲಿ?
ಅವರು ಯಾವ ರೀತಿ ಇದ್ದಾರೆ? ಈ ಕಾಲದ ಜನರು
ಮಾರುಕಟ್ಟೆಯಲ್ಲಿ ಕುಳಿತುಕೊಂಡಿರುವ ಮಕ್ಕಳಂತಿದ್ದಾರೆ.
ಒಂದು ಗುಂಪಿನ ಮಕ್ಕಳು ಮತ್ತೊಂದು ಗುಂಪಿನ ಮಕ್ಕಳಿಗೆ
ಹೀಗೆನ್ನುತ್ತಾರೆ:

17 ‘ನಾವು ನಿಮಗೋಸ್ಕರ ವಾದ್ಯ ಬಾರಿಸಿದೆವು,
ನೀವು ಕುಣಿಯಲಿಲ್ಲ,’ ನಾವು ಶೋಕಗೀತೆ
ಹಾಡಿದೆವು, ನೀವು ದುಃಖಿಸಲಿಲ್ಲ.’

18ಇಂದಿನ ಜನರು ಈ ಮಕ್ಕಳಂತಿದ್ದಾರೆ ಎಂದು ನಾನು
ಹೇಳಿದ್ದೇಕೆ? ಏಕೆಂದರೆ ಯೋಹಾನನು ಬಂದನು. ಆದರೆ
ಅವನು ಬೇರೆ ಜನರಂತೆ ಊಟಮಾಡಲಿಲ್ಲ; ದ್ರಾಕ್ಷಾರಸವನ್ನು
ಕುಡಿಯಲಿಲ್ಲ. ಆದರೆ ಜನರು, ‘ಅವನಿಗೆ ದೆವ್ವ ಹಿಡಿದಿದೆ’ ಎಂದು
ಹೇಳುತ್ತಾರೆ. 19ಮನುಷ್ಯಕುಮಾರನು ಬಂದನು. ಆತನು ಬೇರೆ
ಜನರಂತೆ ಊಟಮಾಡುತ್ತಾನೆ; ದ್ರಾಕ್ಷಾರಸವನ್ನು ಕುಡಿ
ಯುತ್ತಾನೆ. ಆದರೆ ಜನರು, ‘ನೋಡಿರಿ! ಅವನು ಹೊಟ್ಟೆಬಾಕ,
ಅವನು ಕುಡುಕ. ಸುಂಕ ವಸೂಲಿ ಮಾಡುವವರು ಮತ್ತು ಇತರ

ಕೆಟ್ಟ ಜನರೇ ಅವನ ಸ್ನೇಹಿತರು' ಎಂದು ಹೇಳುತ್ತಾರೆ. ಆದರೆ ಜ್ಞಾನವು ತನ್ನ ಕ್ರಿಯೆಗಳಿಂದಲೇ ತನ್ನ ಯೋಗ್ಯತೆಯನ್ನು ತೋರ್ಪಡಿಸುತ್ತದೆ.''

### ನಂಬದ ಜನರಿಗೆ ಯೇಸುವಿನ ಎಚ್ಚರಿಕೆ

(ಲೂಕ 10:13-15)

20ನಂತರ ಯೇಸು, ತಾನು ಯಾವ ಪಟ್ಟಗಳಲ್ಲಿ ಹೇರಳವಾಗಿ ಅದ್ಭುತಕಾರ್ಯಗಳನ್ನು ಮಾಡಿದ್ದನೊ ಆ ಪಟ್ಟಣಗಳನ್ನು ಖಂಡಿಸಿದನು. ಏಕೆಂದರೆ ಆ ಪಟ್ಟಣಗಳಲ್ಲಿದ್ದ ಜನರು ತಮ್ಮ ಜೀವಿತವನ್ನು ಬದಲಾಯಿಸಿಕೊಳ್ಳಲಿಲ್ಲ ಮತ್ತು ಪಾಪ ಮಾಡುವುದನ್ನು ನಿಲ್ಲಿಸಲಿಲ್ಲ. 21ಯೇಸು ಹೇಳಿದ್ದೇನೆಂದರೆ: ''ಖೊರಾಜಿನೇ, ನಿನ್ನ ಗತಿಯನ್ನು ಏನು ಹೇಳಲಿ? ಬೆತ್ಸಾಯಿದವೇ, ನಿನ್ನ ಗತಿಯನ್ನು ಏನು ಹೇಳಲಿ! ನಾನು ನಿಮ್ಮಲ್ಲಿ ಅನೇಕ ಅದ್ಭುತಕಾರ್ಯಗಳನ್ನು ಮಾಡಿದೆನು. ಅದೇ ಅದ್ಭುತ ಕಾರ್ಯಗಳನ್ನು ಟೈರ್, ಸೀದೋನ್‌ಗಳಲ್ಲಿ ಮಾಡಿದ್ದರೆ, ಅವುಗಳ ಜನರು ಬಹಳ ಕಾಲದ ಹಿಂದೆಯೇ ತಮ್ಮ ಜೀವಿತವನ್ನು ಬದಲಾಯಿಸಿಕೊಳ್ಳುತ್ತಿದ್ದರು; ತಮ್ಮ ಪಾಪಗಳಿಗಾಗಿ ದುಃಖ ಪಟ್ಟು ಗೋಣಿತಟ್ಟನ್ನು* ಕಟ್ಟಿಕೊಳ್ಳುತ್ತಿದ್ದರು; ಮೈಮೇಲೆ ಬೂದಿಯನ್ನು ಹಾಕಿಕೊಳ್ಳುತ್ತಿದ್ದರು. 22ಆದರೆ ನ್ಯಾಯತೀರ್ಪಿನ ದಿನದಲ್ಲಿ ಟೈರ್, ಸೀದೋನ್‌ಗಳಿಗಿಂತಲೂ ನಿಮ್ಮ ಸ್ಥಿತಿಯು ಬಹಳ ದುಸ್ಥಿತಿಗೆ ಒಳಗಾಗುವುದೆಂದು ನಾನು ನಿಮಗೆ ಹೇಳುತ್ತೇನೆ. 23ಕಪೆರ್ನೌಮೇ, ನೀನು ಪರಲೋಕಕ್ಕೆ ಎತ್ತಲ್ಪಡುವುದಾಗಿ ಯೋಚಿಸುವಿಯೋ? ಇಲ್ಲ! ನೀನು ಪಾತಾಳಕ್ಕೆ ಇಳಿಯುವೆ. ನಾನು ನಿನ್ನಲ್ಲಿ ಅನೇಕ ಅದ್ಭುತಕಾರ್ಯಗಳನ್ನು ನಡೆಸಿದೆ. ಸೊದೋಮಿನಲ್ಲಿ ಆ ಅದ್ಭುತಕಾರ್ಯಗಳನ್ನು ನಡೆಸಿದ್ದರೆ ಆ ಜನರು ಪಾಪ ಮಾಡುವುದನ್ನು ನಿಲ್ಲಿಸಿಬಿಡುತ್ತಿದ್ದರು ಮತ್ತು ಇಂದಿನವರೆಗೂ ಅದು ಪಟ್ಟಣವಾಗಿಯೇ ಉಳಿದಿರುತ್ತಿತ್ತು. 24ಆದರೆ ನ್ಯಾಯತೀರ್ಪಿನ ದಿನದಲ್ಲಿ ನಿನ್ನ ಪರಿಸ್ಥಿತಿ ಸೊದೋಮಿಗಿಂತಲೂ ದುಸ್ಥಿತಿಗೆ ಒಳಗಾಗುವುದು ಎಂದು ನಾನು ನಿನಗೆ ಹೇಳುತ್ತೇನೆ.''

### ಯೇಸು ಜನರಿಗೆ ವಿಶ್ರಾಂತಿದಾಯಕ

(ಲೂಕ 10:21-22)

25ಬಳಿಕ ಯೇಸು, ''ಪರಲೋಕ ಭೂಲೋಕಗಳ ಪ್ರಭುವಾದ ತಂದೆಯೇ, ನಿನಗೆ ನಾನು ವಂದನೆ ಸಲ್ಲಿಸುತ್ತೇನೆ. ನಾನು ನಿನ್ನನ್ನು ಕೊಂಡಾಡುತ್ತೇನೆ. ಏಕೆಂದರೆ, ನೀನು ಈ ಸಂಗತಿಗಳನ್ನು ಜ್ಞಾನಿಗಳಿಗೂ ಸೂಕ್ಷ್ಮಬುದ್ಧಿಯುಳ್ಳವರಿಗೂ ಮರೆಮಾಡಿರುವೆ. ಆದರೆ ಚಿಕ್ಕ ಮಕ್ಕಳಂತಿರುವ ಈ ಜನರಿಗೆ ನೀನು ಗೋಚರಪಡಿಸಿರುವೆ. 26ಹೌದು ತಂದೆಯೇ, ಇದು ನಿಜವಾಗಿಯೂ ನಿನ್ನ ಚಿತ್ತವಾಗಿದ್ದುದರಿಂದ ನೀನು ಹೀಗೆ ಮಾಡಿರುವೆ.

27''ನನ್ನ ತಂದೆ ನನಗೆ ಎಲ್ಲವನ್ನು ಕೊಟ್ಟಿದ್ದಾನೆ. ಯಾವನೂ ಮಗನನ್ನು ಅರಿತಿಲ್ಲ. ತಂದೆ ಮಾತ್ರ ಮಗನನ್ನು ಅರಿತಿದ್ದಾನೆ. ಯಾವನೂ ತಂದೆಯನ್ನು ಅರಿತಿಲ್ಲ. ಮಗನು ಮಾತ್ರ ತಂದೆಯನ್ನು ಅರಿತಿದ್ದಾನೆ. ಮಗನು ತಂದೆಯನ್ನು ಯಾರಿಗೆ ಪ್ರಕಟಿಸಬೇಕೆಂದು ಇಷ್ಟಪಡುತ್ತಾನೊ ಅವರು ತಂದೆಯನ್ನು ತಿಳಿದುಕೊಳ್ಳುತ್ತಾರೆ.

28''ಕಷ್ಟಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ. ನಾನು ನಿಮಗೆ ವಿಶ್ರಾಂತಿಯನ್ನು ಕೊಡುತ್ತೇನೆ. 29ನನ್ನ ನೊಗಕ್ಕೆ ಹೆಗಲು ಕೊಟ್ಟು, ನನ್ನಿಂದ ಕಲಿತುಕೊಳ್ಳಿರಿ. ನಾನು ಸಾತ್ವಿಕನೂ ದೀನನೂ ಆಗಿರುವುದರಿಂದ ನೀವು ನಿಮ್ಮ ಆತ್ಮಗಳಿಗೆ ವಿಶ್ರಾಂತಿಯನ್ನು ಕಂಡುಕೊಳ್ಳುವಿರಿ. 30ಹೌದು, ನಿಮಗೆ ನನ್ನ ನೊಗವು ಮೃದುವಾಗಿದೆ; ನನ್ನ ಹೊರೆಯು ಹಗುರವಾಗಿದೆ.''

### ಕೆಲವು ಯೆಹೂದ್ಯರು ಯೇಸುವಿನ ಕುರಿತು ಮಾಡಿದ ಟೀಕೆ

(ಮಾರ್ಕ 2:23-28; 6:1-5)

12 ಅಂದು ಸಬ್ಬತ್‌ದಿನ. ಯೇಸು ಧಾನ್ಯದ ಹೊಲಗಳ ಮಾರ್ಗವಾಗಿ ನಡೆದುಹೋಗುತ್ತಿದ್ದನು. ಯೇಸುವಿನ ಶಿಷ್ಯರು ಆತನೊಂದಿಗಿದ್ದರು. ಅವರು ಹಸಿದಿದ್ದರು. ಆದ್ದರಿಂದ ಶಿಷ್ಯರು ತೆನೆಗಳನ್ನು ಕಿತ್ತುಕೊಂಡು ತಿನ್ನತೊಡಗಿದರು. 2ಇದನ್ನು ಕಂಡ ಫರಿಸಾಯರು ಯೇಸುವಿಗೆ, ''ನೋಡು! ಸಬ್ಬತ್ ದಿನದಂದು ಮಾಡತಕ್ಕ ಕಾರ್ಯಗಳನ್ನು ಕುರಿತು ಯೆಹೂದ್ಯರ ಧರ್ಮಶಾಸ್ತ್ರದಲ್ಲಿ ವಿಧಿಸಿರುವ ನಿಯಮಗಳಿಗೆ ವಿರುದ್ಧವಾಗಿ ನಿನ್ನ ಶಿಷ್ಯರು ಮಾಡುತ್ತಿದ್ದಾರೆ.'' ಎಂದು ಹೇಳಿದರು.

3ಅದಕ್ಕೆ ಯೇಸು, ''ತಾನೂ ತನ್ನೊಂದಿಗಿದ್ದ ಜನರೂ ಹಸಿದಾಗ ದಾವೀದನು ಏನು ಮಾಡಿದನೆಂಬುದನ್ನು ನೀವು ಓದಲಿಲ್ಲವೇ? 4ದಾವೀದನು ದೇವರ ಮಂದಿರದೊಳಗೆ ಹೋದನು. ದೇವರಿಗೆ ಸಮರ್ಪಿಸಿದ್ದ ರೊಟ್ಟಿಯನ್ನು ದಾವೀದನು ಮತ್ತು ಅವನೊಂದಿಗಿದ್ದ ಜನರು ತಿಂದರು. ಅವರು ಆ ರೊಟ್ಟಿಯನ್ನು ತಿನ್ನುವುದು ಧರ್ಮಶಾಸ್ತ್ರಕ್ಕೆ ವಿರೋಧವಾಗಿತ್ತು. ಅದನ್ನು ತಿನ್ನಲು ಯಾಜಕರಿಗೆ ಮಾತ್ರ ಅವಕಾಶವಿತ್ತು. 5ಪ್ರತಿಯೊಂದು ಸಬ್ಬತ್ ದಿನದಲ್ಲಿ ಯಾಜಕರು ದೇವಾಲಯದಲ್ಲಿ ಸಬ್ಬತ್‌ದಿನದ ನಿಯಮಗಳನ್ನು ಮೀರಿದರೂ ತಪ್ಪಿತಸ್ಥರಾಗುವುದಿಲ್ಲವೆಂದು ನೀವು ಮೋಶೆಯ ಧರ್ಮಶಾಸ್ತ್ರದಲ್ಲಿ ಓದಲಿಲ್ಲವೇ? 6ಆದರೆ ದೇವಾಲಯಕ್ಕಿಂತಲೂ ಹೆಚ್ಚಿನವನು ಇಲ್ಲಿದ್ದಾನೆಂದು ನಾನು ನಿಮಗೆ ಹೇಳುತ್ತೇನೆ.

7''ಪಶುಯಜ್ಞಗಳು ನನಗೆ ಬೇಡ, ಕರುಣೆಯೇ ನನಗೆ ಬೇಕು'* ಎಂದು ಪವಿತ್ರಗ್ರಂಥವು ಹೇಳುತ್ತದೆ. ಅದರ ಅರ್ಥವನ್ನು ನೀವು ನಿಜವಾಗಿಯೂ ಅರಿತಿಲ್ಲ. ನೀವು ಅದರ ಅರ್ಥವನ್ನು ತಿಳಿದುಕೊಂಡರೆ ತಪ್ಪನ್ನೇನೂ ಮಾಡದ ಇವರಿಗೆ ತಪ್ಪಿತಸ್ಥರೆಂದು ತೀರ್ಪು ಮಾಡುವುದಿಲ್ಲ.

8''ಮನುಷ್ಯಕುಮಾರನು ಸಬ್ಬತ್‌ದಿನಕ್ಕೂ ಪ್ರಭುವಾಗಿದ್ದಾನೆ'' ಎಂದು ಹೇಳಿದನು.

### ಕೈಬತ್ತಿದವನಿಗೆ ಆರೋಗ್ಯದಾನ

(ಮಾರ್ಕ 3:1-6; ಲೂಕ 6:6-11)

9ಯೇಸು ಆ ಸ್ಥಳವನ್ನು ಬಿಟ್ಟು ಅವರ ಸಭಾಮಂದಿರದೊಳಕ್ಕೆ ಹೋದನು. 10ಆ ಸಭಾಮಂದಿರದಲ್ಲಿ ಒಬ್ಬನ ಕೈ ಊನವಾಗಿತ್ತು. ಯೆಹೂದ್ಯರಲ್ಲಿ ಕೆಲವರು ಯೇಸುವಿನ ಮೇಲೆ ತಪ್ಪು ಹೊರಿಸುವುದಕ್ಕಾಗಿ ಕಾರಣ ಹುಡುಕುತ್ತಿದ್ದರು. ಆದ್ದರಿಂದ ಅವರು ಯೇಸುವಿಗೆ ''ಸಬ್ಬತ್‌ದಿನದಲ್ಲಿ ಗುಣಪಡಿಸುವುದು ಸರಿಯೇ?'' ಎಂದು ಕೇಳಿದರು.

---

**ಗೋಣಿತಟ್ಟು** ದುಃಖವನ್ನು ಸೂಚಿಸುವುದಕ್ಕಾಗಿ ಧರಿಸಿಕೊಳ್ಳುತ್ತಿದ್ದರು.

**ಪಶು ... ಬೇಕು** ಹೋಶೇಯ 6:6.

11ಯೇಸು, ‘‘ನಿಮ್ಮಲ್ಲಿ ಯಾರ ಬಳಿಯಾದರೂ ಒಂದು
ಕುರಿಯಿದ್ದು, ಆ ಕುರಿಯು ಸಬ್ಬತ್‌ದಿನದಂದು ಕುಣಿಯೊಳಕ್ಕೆ
ಬಿದ್ದರೆ, ನೀವು ಆ ಕುರಿಯನ್ನು ಕುಣಿಯಿಂದ ಮೇಲಕ್ಕೆ
ಎತ್ತುವಿರಿ. 12ಮನುಷ್ಯನು ಕುರಿಗಿಂತ ಎಷ್ಟೋ ಬೆಲೆ ಉಳ್ಳವ
ನಾಗಿದ್ದಾನೆ. ಆದ್ದರಿಂದ ಸಬ್ಬತ್‌ದಿನದಲ್ಲಿ ಒಳ್ಳೆಯ ಕಾರ್ಯ
ಗಳನ್ನು ಮಾಡುವುದು ಮೋಶೆಯ ಧರ್ಮಶಾಸ್ತ್ರಕ್ಕೆ ಅನುಸಾರ
ವಾದದ್ದು’’ಎಂದು ಉತ್ತರ ಕೊಟ್ಟನು.
13ನಂತರ ಯೇಸು ಕೈ ಊನವಾಗಿದ್ದ ಮನುಷ್ಯನಿಗೆ, ‘‘ನಿನ್ನ
ಕೈ ತೋರಿಸು’’ ಎಂದನು. ಅವನು ತನ್ನ ಕೈಯನ್ನು ಆತನ ಕಡೆಗೆ
ಚಾಚಿದನು. ಕೂಡಲೇ, ಅವನ ಕೈ ಮತ್ತೊಂದು ಕೈಯಂತೆ
ಸರಿಯಾಯಿತು. 14ಆದರೆ ಫರಿಸಾಯರು ಹೊರಟುಹೋಗಿ,
ಯೇಸುವನ್ನು ಕೊಲ್ಲಲು ಉಪಾಯಗಳನ್ನು ಮಾಡಿಕೊಂಡರು.

### ಯೇಸು ದೇವರಿಂದ ಆರಿಸಲ್ಪಟ್ಟ ಸೇವಕ

15ಫರಿಸಾಯರು ಏನು ಮಾಡುತ್ತಿದ್ದಾರೆಂಬುದು ಯೇಸುವಿಗೆ
ತಿಳಿದಿತ್ತು. ಆದ್ದರಿಂದ ಆತನು ಆ ಸ್ಥಳವನ್ನು ಬಿಟ್ಟುಹೋದನು.
ಅನೇಕ ಜನರು ಆತನನ್ನು ಹಿಂಬಾಲಿಸಿದರು. ಆತನು ಎಲ್ಲಾ
ರೋಗಿಗಳನ್ನು ಗುಣಪಡಿಸಿದನು. 16ಆದರೆ ತಾನು ಯಾರೆಂಬು
ದನ್ನು ಬೇರೆ ಜನರಿಗೆ ಹೇಳಬಾರದೆಂದು ಆತನು ಜನರನ್ನು
ಎಚ್ಚರಿಸಿದನು. 17ಪ್ರವಾದಿಯಾದ ಯೆಶಾಯನು ಹೇಳಿದ್ದನ್ನು
ನೆರವೇರಿಸುವುದಕ್ಕಾಗಿ ಯೇಸು ಇವುಗಳನ್ನು ಮಾಡಿದನು.
ಯೆಶಾಯನು ಹೇಳಿದ್ದೇನೆಂದರೆ:

18 ‘‘ಇಗೋ, ನನ್ನ ಸೇವಕನು. ನಾನು ಆತನನ್ನು
ಆರಿಸಿಕೊಂಡಿದ್ದೇನೆ. ಆತನನ್ನು ಪ್ರೀತಿಸುತ್ತೇನೆ,
ಆತನನ್ನು ಮೆಚ್ಚಿದ್ದೇನೆ. ಆತನ ಮೇಲೆ ನನ್ನ
ಆತ್ಮವನ್ನು ಇರಿಸುವೆನು. ಆತನು ಜನಾಂಗಗಳಿಗೆ
ನ್ಯಾಯವಾದ ತೀರ್ಪು ಮಾಡುವನು.
19 ಆತನು ಜಗಳವಾಡುವುದಿಲ್ಲ. ಕೂಗಾಡುವುದಿಲ್ಲ.
ಬೀದಿಗಳಲ್ಲಿ ಆತನ ಶಬ್ದ ಕೇಳಬರುವುದಿಲ್ಲ.
20 ಬಾಗಿಹೋದ ದಂಟನ್ನು ಆತನು ಮುರಿಯು
ವುದಿಲ್ಲ; ಆರಿಹೋಗುತ್ತಿರುವ ದೀಪವನ್ನು
ಆತನು ನಂದಿಸುವುದಿಲ್ಲ. ನ್ಯಾಯವಾದ ತೀರ್ಪು
ಜಯಗಳಿಸುವಂತೆ ಆತನು ಮಾಡುವನು.
21 ಎಲ್ಲಾ ಜನರು ಆತನಲ್ಲಿ ಭರವಸೆ ಇಡುವರು.’’
*ಯೆಶಾಯ 42:1-4*

### ಯೇಸುವಿನ ಅಧಿಕಾರ ದೇವರದೇ

(ಮಾರ್ಕ 3:20-30 ಲೂಕ 11:14-23; 12:10)

22ಆಗ ಕೆಲವು ಜನರು ಒಬ್ಬನನ್ನು ಯೇಸುವಿನ ಬಳಿಗೆ
ತಂದರು. ಅವನಲ್ಲಿ ದೆವ್ವವಿದ್ದುದರಿಂದ ಅವನು ಕುರುಡ
ನಾಗಿದ್ದನು ಮತ್ತು ಮೂಕನಾಗಿದ್ದನು. ಯೇಸು ಆ ಮನುಷ್ಯ
ನನ್ನು ಗುಣಪಡಿಸಿದ್ದರಿಂದ ಮಾತನಾಡುವುದಕ್ಕೂ ನೋಡು
ವುದಕ್ಕೂ ಸಾಧ್ಯವಾಯಿತು. 23ಜನರೆಲ್ಲರೂ ಬೆರಗಾದರು.
‘‘ದೇವರು ಕಳುಹಿಸಿಕೊಡುವುದಾಗಿ ನಮಗೆ ವಾಗ್ದಾನಮಾಡಿದ್ದ
ದಾವೀದನ ಕುಮಾರನು ಈತನೇ (ಯೇಸು) ಆಗಿರಬಹುದು’’
ಎಂದು ಮಾತಾಡಿಕೊಂಡರು.
24ಜನರು ಹೀಗೆ ಮಾತಾಡುತ್ತಿದ್ದುದನ್ನು ಕೇಳಿಸಿಕೊಂಡ
ಫರಿಸಾಯರು, ‘‘ಯೇಸು ಬೆಲ್ಜೆಬೂಲನ ಶಕ್ತಿಯ ಮೂಲಕ
ಜನರನ್ನು ದೆವ್ವಗಳಿಂದ ಬಿಡಿಸುತ್ತಾನೆ. ಬೆಲ್ಜೆಬೂಲನು ದೆವ್ವಗಳ
ಅಧಿಪತಿ’’ ಎಂದರು.
25ಫರಿಸಾಯರು ಆಲೋಚಿಸುತ್ತಿದ್ದ ಸಂಗತಿಗಳು ಯೇಸುವಿಗೆ
ತಿಳಿದಿದ್ದವು. ಆದ್ದರಿಂದ ಯೇಸು ಅವರಿಗೆ, ‘‘ತನಗೆ ವಿರೋಧ
ವಾಗಿ ತಾನೇ ಹೋರಾಡುವ ರಾಜ್ಯವು ನಾಶವಾಗುವುದು. ಅಂತಃ
ಕಲಹದಿಂದ ಒಡೆದು ಹೋಗಿರುವ ಪ್ರತಿಯೊಂದು ರಾಜ್ಯವು
ಸ್ಥಿರವಾಗಿರುವುದಿಲ್ಲ. ಭೇದಭಾವ ಹೊಂದಿರುವ ಪ್ರತಿಯೊಂದು
ಕುಟುಂಬವು ಅಭಿವೃದ್ಧಿಯಾಗುವುದಿಲ್ಲ. 26ಹೀಗಿರಲು
ಸೈತಾನನು ತನ್ನ ಸ್ವಂತ ದೆವ್ವಗಳನ್ನೇ ಹೊರಗೆ ಓಡಿಸಿದರೆ ಅವನು
ತನ್ನಲ್ಲಿಯೇ ಒಡಕನ್ನು ಮಾಡಿದಂತಾಯಿತು. ಆಗ ಅವನು ಮತ್ತು
ಅವನ ರಾಜ್ಯವು ಸ್ಥಿರವಾಗಿರಲು ಹೇಗೆ ಸಾಧ್ಯ. 27ನಾನು ಸೈತಾನನ
ಶಕ್ತಿಯಿಂದ ದೆವ್ವಗಳನ್ನು ಬಿಡಿಸುತ್ತೇನೆ ಎಂದು ನೀವು
ಹೇಳುತ್ತೀರಿ. ಅದು ನಿಜವಾದರೆ, ನಿಮ್ಮ ಜನರು ಯಾವ
ಶಕ್ತಿಯಿಂದ ದೆವ್ವಗಳನ್ನು ಬಿಡಿಸುತ್ತಾರೆ? ಆದ್ದರಿಂದ ನಿಮ್ಮ ಸ್ವಂತ
ಜನರೇ ನಿಮ್ಮನ್ನು ತಪ್ಪಿತಸ್ಥರೆಂದು ನಿರೂಪಿಸುತ್ತಾರೆ. 28ಆದರೆ
ನಾನು ದೇವರಾತ್ಮನ ಶಕ್ತಿಯ ಮೂಲಕ ದೆವ್ವಗಳನ್ನು ಬಿಡಿಸು
ತ್ತೇನೆ. ದೇವರ ರಾಜ್ಯವು ನಿಮ್ಮ ಬಳಿಗೆ ಬಂದಿದೆ ಎಂಬುದನ್ನು
ಇದು ತೋರ್ಪಡಿಸುತ್ತದೆ.
29‘‘ಬಲಿಷ್ಠನೊಬ್ಬನ ಮನೆಗೆ ನುಗ್ಗಿ ಅವನ ಸ್ವತ್ತನ್ನು ಕದಿಯ
ಬೇಕಿದ್ದರೆ ಮೊದಲು ಅವನು ಆ ಬಲಿಷ್ಠನನ್ನು ಕಟ್ಟಿಹಾಕಬೇಕು.
ಆಗ ಆ ಬಲಿಷ್ಠನ ಮನೆಯ ಸ್ವತ್ತನ್ನು ಕದಿಯಲು ಅವನಿಗೆ
ಸಾಧ್ಯವಾಗುವುದು.
30‘‘ನನ್ನೊಂದಿಗೆ ಇಲ್ಲದವನು ನನಗೆ ವಿರೋಧಿಯಾಗಿದ್ದಾನೆ.
ನನ್ನೊಂದಿಗೆ ಶೇಖರಿಸದವನು ಚದರಿಸುವವನಾಗಿದ್ದಾನೆ.
31ಆದ್ದರಿಂದ ನಾನು ನಿಮಗೆ ಹೇಳುವುದೇನೆಂದರೆ, ಜನರು
ಮಾಡುವ ಪ್ರತಿಯೊಂದು ಪಾಪಕ್ಕೂ ಹೇಳುವ ಪ್ರತಿಯೊಂದು
ದೂಷಣೆ ಮಾತಿಗೂ ಕ್ಷಮಾಪಣೆ ಉಂಟು. ಆದರೆ ಪವಿತ್ರಾತ್ಮ
ದೂಷಣೆಗೆ ಕ್ಷಮಾಪಣೆ ಇಲ್ಲವೇ ಇಲ್ಲ. 32ಮನುಷ್ಯಕುಮಾರನಿಗೆ
ವಿರೋಧವಾಗಿ ಮಾತನಾಡಿದರೂ ಅದಕ್ಕೆ ಕ್ಷಮಾಪಣೆ ಉಂಟು.
ಆದರೆ ಪವಿತ್ರಾತ್ಮನಿಗೆ ವಿರೋಧವಾಗಿ ಮಾತನಾಡಿದರೆ ಅದಕ್ಕೆ
ಕ್ಷಮಾಪಣೆಯು ಇಹದಲ್ಲಾಗಲಿ ಪರದಲ್ಲಾಗಲಿ ಇಲ್ಲವೇ ಇಲ್ಲ.

### ನಿಮ್ಮ ನಿಜಸ್ಥಿತಿಗೆ ನಿಮ್ಮ ಕಾರ್ಯಗಳೇ ಸಾಕ್ಷಿ

(ಲೂಕ 6:43-45)

33 ‘‘ನಿಮಗೆ ಒಳ್ಳೆಯ ಫಲ ಬೇಕಾಗಿದ್ದರೆ ನೀವು ಒಳ್ಳೆಯ ಮರ
ಹೊಂದಿರಬೇಕು. ನಿಮ್ಮ ಮರ ಒಳ್ಳೆಯದಾಗಿಲ್ಲದಿದ್ದರೆ ಅದು
ಕೆಟ್ಟ ಫಲವನ್ನೇ ಬಿಡುವುದು. ಮರವನ್ನು ಅದರಲ್ಲಿ ಬಿಡುವ
ಫಲದಿಂದಲೇ ತಿಳಿದುಕೊಳ್ಳಬಹುದು. 34ನೀವು ಹಾವುಗಳು!
ನೀವು ದುಷ್ಟರು! ಒಳ್ಳೆಯದನ್ನು ನೀವು ಹೇಗೆ ಹೇಳುವಿರಿ? ನಿಮ್ಮ
ಹೃದಯದಲ್ಲಿ ತುಂಬಿರುವುದನ್ನೇ ನಿಮ್ಮ ಬಾಯಿ ಮಾತಾಡು
ತ್ತದೆ. 35ಒಳ್ಳೆಯವನು ತನ್ನ ಹೃದಯದಲ್ಲಿ ಒಳ್ಳೆಯವುಗಳನ್ನು
ಇಟ್ಟುಕೊಂಡಿರುತ್ತಾನೆ. ಆದ್ದರಿಂದ ಅವನು ತನ್ನ ಹೃದಯದಿಂದ
ಬರುವ ಒಳ್ಳೆಯವುಗಳನ್ನೇ ಮಾತಾಡುತ್ತಾನೆ. ಆದರೆ ದುಷ್ಟನು
ತನ್ನ ಹೃದಯದಲ್ಲಿ ಕೆಟ್ಟವುಗಳನ್ನು ಶೇಖರಿಸಿಕೊಂಡಿರುತ್ತಾನೆ.
ಆದ್ದರಿಂದ ಅವನು ತನ್ನ ಹೃದಯದಿಂದ ಬರುವ ಕೆಟ್ಟವುಗಳನ್ನೇ

ಮಾತಾಡುತ್ತಾನೆ. 36ಜನರು ನಿರ್ಲಕ್ಷ್ಯಭಾವದಿಂದ ಆಡಿದ ಪ್ರತಿ
ಯೊಂದು ಮಾತಿಗೂ ನ್ಯಾಯವಿಚಾರಣೆಯ ದಿನದಲ್ಲಿ ಉತ್ತರ
ಕೊಡಬೇಕಾಗುವುದು. 37ನಿಮ್ಮ ಮಾತುಗಳಿಂದಲೇ ನಿಮ್ಮನ್ನು
ನೀತಿವಂತರೆಂದಾಗಲಿ ಅಪರಾಧಿಗಳೆಂದಾಗಲಿ ತೀರ್ಪು ನೀಡ
ಲಾಗುವುದು’’ಎಂದನು.

### ಸೂಚಕಕಾರ್ಯಕ್ಕಾಗಿ ಯೆಹೂದ್ಯರ ಬೇಡಿಕೆ

(ಮಾರ್ಕ 8:11-12; ಲೂಕ 11:29-32)

38ಆಗ ಕೆಲವು ಫರಿಸಾಯರು ಮತ್ತು ಧರ್ಮೋಪದೇಶಕರು
ಯೇಸುವಿಗೆ, ‘‘ಬೋಧಕನೇ, ನೀನು ಹೇಳಿದ್ದನ್ನು ನಿರೂಪಿಸು
ವುದಕ್ಕಾಗಿ ಒಂದು ಸೂಚಕಕಾರ್ಯವನ್ನು ಮಾಡು’’ ಎಂದು
ಹೇಳಿದರು.
39ಯೇಸು, ‘‘ದುಷ್ಟರು ಮತ್ತು ಪಾಪಿಗಳು ಸೂಚಕಕಾರ್ಯ
ವನ್ನು ಅಪೇಕ್ಷಿಸುತ್ತಾರೆ. ಆದರೆ ಅವರಿಗೆ ಒಂದು ಸೂಚಕ
ಕಾರ್ಯವನ್ನೂ ಗುರುತಿಗಾಗಿ ತೋರಿಸಲಾಗುವುದಿಲ್ಲ.
40ಪ್ರವಾದಿಯಾದ ಯೋನನು ಮೂರು ದಿವಸ ಹಗಲಿರುಳು
ಒಂದು ದೊಡ್ಡ ಮೀನಿನ ಹೊಟ್ಟೆಯಲ್ಲಿ ಹೇಗಿದ್ದನೊ ಅದೇ
ರೀತಿಯಲ್ಲಿ ಮನುಷ್ಯಕುಮಾರನು ಸಮಾಧಿಯಲ್ಲಿ ಮೂರು ದಿನ
ಹಗಲಿರುಳು ಇರುವನು. ಇದಲ್ಲದೆ ಬೇರೆ ಯಾವ ಸೂಚಕ
ಕಾರ್ಯವನ್ನು ಅವರಿಗೆ ತೋರಿಸಲಾಗುವುದಿಲ್ಲ. 41ನ್ಯಾಯ
ವಿಚಾರಣೆಯ ದಿನದಂದು ನಿನವೆ ಪಟ್ಟಣದ ಜನರು ಇಂದು
ಜೀವಿಸುತ್ತಿರುವ ನಿಮ್ಮೊಂದಿಗೆ ನಿಂತುಕೊಂಡು ನಿಮ್ಮನ್ನು
ಅಪರಾಧಿಗಳೆಂದು ಘೋಷಿಸುವರು. ಏಕೆಂದರೆ ಯೋನನು
ಬೋಧಿಸಿದಾಗ ಅವರು ತಮ್ಮ ಜೀವಿತವನ್ನು ಬದಲಾವಣೆ
ಮಾಡಿಕೊಂಡರು. ಆದರೆ ನಾನು ನಿಮಗೆ ಹೇಳುವುದೇನೆಂದರೆ
ನಾನು ಯೋನನಿಗಿಂತಲೂ ಹೆಚ್ಚಿನವನಾಗಿರುತ್ತೇನೆ. 42ನ್ಯಾಯ
ತೀರ್ಪಿನ ದಿನದಂದು ದಕ್ಷಿಣ ದೇಶದ ರಾಣಿಯು ಇಂದು
ಜೀವಿಸುತ್ತಿರುವ ನಿಮ್ಮೊಂದಿಗೆ ಎದ್ದುನಿಂತು ನಿಮ್ಮನ್ನು ತಪ್ಪಿತಸ್ಥ
ರೆಂದು (ಅಪರಾಧಿಗಳು) ನಿರೂಪಿಸುವಳು. ಏಕೆಂದರೆ, ಆ
ರಾಣಿಯು ಸೊಲೊಮೋನನ ಜ್ಞಾನದ ಬೋಧನೆಯನ್ನು
ಕೇಳಲು ಬಹಳ ದೂರದಿಂದ ಬಂದಳು. ನಾನಾದರೋ
ಸೊಲೊಮೋನನಿಗಿಂತಲೂ ಹೆಚ್ಚಿನವನಾಗಿದ್ದೇನೆ ಎಂದು
ನಿಮಗೆ ಹೇಳುತ್ತೇನೆ.

### ಇಂದಿನ ದುಷ್ಟಜನರ ಸ್ಥಿತಿ

(ಲೂಕ 11:24-26)

43‘‘ದುರಾತ್ಮವು ಮನುಷ್ಯನಿಂದ ಹೊರಗೆ ಬಂದಾಗ
ವಿಶ್ರಾಂತಿಗಾಗಿ ಸ್ಥಳವನ್ನು ಹುಡುಕುತ್ತಾ ನೀರಿಲ್ಲದ ಸ್ಥಳಗಳಲ್ಲಿ
ಪ್ರಯಾಣ ಮಾಡುತ್ತದೆ. ಆದರೆ ಆ ದುರಾತ್ಮಕ್ಕೆ ಬೇಕಾದ
ವಿಶ್ರಾಂತಿ ಸ್ಥಳ ಸಿಕ್ಕುವುದಿಲ್ಲ. 44ಆಗ ಅದು, ತಾನು ಬಿಟ್ಟು ಬಂದ
ಮನೆಗೇ ಹಿಂತಿರುಗಿ ಹೋಗುತ್ತೇನೆ ಎಂದುಕೊಳ್ಳುತ್ತದೆ. ಬಳಿಕ
ಅದು ಅವನ ಬಳಿಗೆ ಮತ್ತೆ ಬಂದಾಗ ಆ ಮನೆಯು ಇನ್ನೂ
ಬರಿದಾಗಿರುತ್ತದೆ. ಚೊಕ್ಕಟವಾಗಿ ಗುಡಿಸಿ ಅಲಂಕರಿಸಲ್ಪಟ್ಟಿ
ರುತ್ತದೆ. 45ಆಗ ಅದು ಹೊರಗೆ ಹೋಗಿ ತನಗಿಂತಲೂ ಹೆಚ್ಚು
ದುಷ್ಟರಾದ ಏಳು ದುರಾತ್ಮಗಳನ್ನು ಕರೆದುಕೊಂಡು ಬರುತ್ತದೆ.
ಆ ದುರಾತ್ಮಗಳೆಲ್ಲಾ ಆ ಮನುಷ್ಯನೊಳಗೆ ಸೇರಿಕೊಂಡು ವಾಸ
ಮಾಡಲಾರಂಭಿಸುತ್ತವೆ. ಆಗ ಆ ಮನುಷ್ಯನಿಗೆ ಮೊದಲಿ
ಗಿಂತಲೂ ಹೆಚ್ಚಿನ ಕಷ್ಟಗಳು ಉಂಟಾಗುತ್ತವೆ. ಈ ದಿನಗಳಲ್ಲಿ
ಜೀವಿಸುವ ದುಷ್ಟ ಜನರಿಗೆ ಅದೇ ರೀತಿ ಆಗುವದು’’ ಎಂದನು.

### ಯೇಸುವಿನ ಶಿಷ್ಯರೇ ಆತನ ಕುಟುಂಬ

(ಮಾರ್ಕ 3:31-35; ಲೂಕ 8:19-21)

46ಯೇಸುವು ಜನರೊಂದಿಗೆ ಮಾತಾಡುತ್ತಿರುವಾಗ, ಆತನ
ತಾಯಿ ಮತ್ತು ಸಹೋದರರು ಬಂದು ಹೊರಗೆ ನಿಂತು
ಕೊಂಡರು. ಅವರು ಆತನೊಂದಿಗೆ ಮಾತಾಡಬೇಕೆಂದಿದ್ದರು.
47ಒಬ್ಬನು ಯೇಸುವಿಗೆ, ‘‘ನಿನ್ನ ತಾಯಿ ಮತ್ತು ಸಹೋದರರು
ನಿನಗಾಗಿ ಹೊರಗಡೆ ಕಾದಿದ್ದಾರೆ, ಅವರು ನಿನ್ನೊಂದಿಗೆ
ಮಾತಾಡಬೇಕೆಂದಿದ್ದಾರೆ’’ ಎಂದನು.
48ಯೇಸು, ‘‘ನನ್ನ ತಾಯಿ ಯಾರು? ನನ್ನ ಸಹೋದರರು
ಯಾರು?’’ ಎಂದು ಉತ್ತರಕೊಟ್ಟು, 49ತನ್ನ ಶಿಷ್ಯರ ಕಡೆಗೆ ಕೈ
ತೋರಿಸಿ, ‘‘ನೋಡಿ! ಇವರೇ ನನ್ನ ತಾಯಿ ಮತ್ತು ನನ್ನ
ಸಹೋದರರು. 50ಪರಲೋಕದಲ್ಲಿರುವ ನನ್ನ ತಂದೆ ಇಚ್ಛಿಸು
ವಂಥವುಗಳನ್ನು ಮಾಡುವವನೇ ನನ್ನ ನಿಜವಾದ ಸಹೋದರ,
ಸಹೋದರಿ ಮತ್ತು ತಾಯಿ’’ ಎಂದು ಹೇಳಿದನು.

### ಬಿತ್ತನೆಯನ್ನು ಉದಾಹರಿಸಿ ಯೇಸು ಹೇಳಿದ ಬೋಧನೆ

(ಮಾರ್ಕ 4:1-9; ಲೂಕ 8:4-8)

13 ಆದೇ ದಿನದಲ್ಲಿ ಯೇಸು ಮನೆಯಿಂದ ಹೊರಟು
ಸರೋವರದ ತೀರದಲ್ಲಿ ಕುಳಿತುಕೊಂಡನು. 2ಅನೇಕ
ಜನರು ಯೇಸುವಿನ ಸುತ್ತಲೂ ನೆರೆದರು. ಆಗ ಯೇಸು
ದೋಣಿಯೊಳಕ್ಕೆ ಹೋಗಿ ಕುಳಿತುಕೊಂಡನು. ಜನರೆಲ್ಲರೂ
ದಡದಲ್ಲಿ ನಿಂತಿದ್ದರು. 3ಆಗ ಯೇಸು ಸಾಮ್ಯಗಳ ಮೂಲಕ
ಅನೇಕ ವಿಷಯಗಳನ್ನು ಅವರಿಗೆ ಬೋಧಿಸಿದನು. ಯೇಸು
ಅವರಿಗೆ ಈ ಸಾಮ್ಯವನ್ನು ಹೇಳಿದನು: ‘‘ಒಬ್ಬ ರೈತನು ಬೀಜ
ಬಿತ್ತುವುದಕ್ಕೆ ಹೋದನು. 4ಅವನು ಬೀಜ ಬಿತ್ತುವಾಗ ಕೆಲವು
ಬೀಜಗಳು ರಸ್ತೆಯ ಮಗ್ಗುಲಲ್ಲಿ ಬಿದ್ದವು. ಹಕ್ಕಿಗಳು ಬಂದು
ಬೀಜಗಳನ್ನೆಲ್ಲ ತಿಂದುಬಿಟ್ಟವು. 5ಕೆಲವು ಬೀಜಗಳು ಬಂಡೆಯ
ನೆಲದಲ್ಲಿ ಬಿದ್ದವು. ಅಲ್ಲಿಯ ನೆಲದಲ್ಲಿ ಸಾಕಷ್ಟು
ಮಣ್ಣಿಲ್ಲದಿದ್ದುದರಿಂದ ಬೀಜಗಳು ಬೇಗ ಮೊಳೆತವು. 6ಆದರೆ
ಬಿಸಿಲೇರಿದಾಗ ಆ ಮೊಳಕೆಗಳು ಒಣಗಿಹೋದವು. ಏಕೆಂದರೆ
ಅವುಗಳಿಗೆ ಆಳವಾದ ಬೇರಿರಲಿಲ್ಲ. 7ಬೇರೆ ಕೆಲವು ಬೀಜಗಳು
ಮುಳ್ಳುಗಿಡಗಳಲ್ಲಿ ಬಿದ್ದವು. ಮುಳ್ಳುಗಿಡಗಳು ಬೆಳೆದು ಒಳ್ಳೆಯ
ಗಿಡಗಳು ಬೆಳೆಯುವುದನ್ನು ತಡೆದುಬಿಟ್ಟವು. 8ಬೇರೆ ಕೆಲವು
ಬೀಜಗಳು ಒಳ್ಳೆಯ ನೆಲದಲ್ಲಿ ಬಿದ್ದವು. ಅವು ಬೆಳೆದು
ಕಾಳುಬಿಟ್ಟವು. ಕೆಲವು ಗಿಡಗಳು ನೂರರಷ್ಟು, ಕೆಲವು ಗಿಡಗಳು
ಅರವತ್ತರಷ್ಟು, ಇನ್ನು ಕೆಲವು ಮೂವತ್ತರಷ್ಟು ಕಾಳುಬಿಟ್ಟವು.
9ನನಗೆ ಕಿವಿಗೊಡುವ ಜನರೇ, ಲಾಲಿಸಿರಿ!’’

### ಯೇಸು ಸಾಮ್ಯಗಳನ್ನು ಏಕೆ ಬಳಸಿದನು?

(ಮಾರ್ಕ 4:10-12; ಲೂಕ 8:9-10)

10ಆಗ ಶಿಷ್ಯರು ಯೇಸುವಿನ ಬಳಿಗೆ ಬಂದು, ‘‘ನೀನು
ಸಾಮ್ಯಗಳ ಮೂಲಕ ಜನರಿಗೆ ಉಪದೇಶಿಸುವುದೇಕೆ?’’ಎಂದು
ಕೇಳಿದರು. 11ಯೇಸು, ‘‘ಪರಲೋಕ ರಾಜ್ಯದ ರಹಸ್ಯವಾದ
ಸತ್ಯಗಳನ್ನು ನೀವು ಮಾತ್ರ ತಿಳಿದುಕೊಳ್ಳಬಲ್ಲಿರಿ. ಈ ಸತ್ಯಗಳ

ರಹಸ್ಯವು ಬೇರೆ ಜನರಿಗೆ ತಿಳಿಯಲಾರದು. 12ಸ್ವಲ್ಪ ಜ್ಞಾನವನ್ನು
ಹೊಂದಿರುವವನು ಇನ್ನೂ ಹೆಚ್ಚು ಜ್ಞಾನವನ್ನು ಪಡೆದುಕೊಂಡು
ಸಾಕಷ್ಟು ಜ್ಞಾನವಂತನಾಗುವನು. ಆದರೆ ಜ್ಞಾನವನ್ನು ಹೊಂದಿಲ್ಲ
ದವನು ತನಗಿರುವ ಸ್ವಲ್ಪ ಜ್ಞಾನವನ್ನೂ ಕಳೆದುಕೊಳ್ಳುವನು. 13ಈ
ಕಾರಣದಿಂದಲೇ ನಾನು ಈ ಸಾಮ್ಯಗಳ ಮೂಲಕ ಇವರಿಗೆ
ಬೋಧಿಸುತ್ತೇನೆ. ಈ ಜನರು ನೋಡಿದರೂ ಕಾಣುವುದಿಲ್ಲ,
ಕೇಳಿದರೂ ಗ್ರಹಿಸುವುದಿಲ್ಲ. 14ಇಂಥವರ ಬಗ್ಗೆ ಯೆಶಾಯನು
ಹೇಳಿದ್ದೇನೆಂದರೆ:

> 'ನೀವು ಆಲಿಸುತ್ತೀರಿ, ಕೇಳುತ್ತೀರಿ, ಆದರೆ ನಿಮಗೆ
> ಅರ್ಥವಾಗುವುದಿಲ್ಲ. ನೀವು ದೃಷ್ಟಿಸಿ ನೋಡು
> ತ್ತೀರಿ, ಆದರೆ ನಿಮಗೆ ಕಾಣುವುದನ್ನು ಅರ್ಥ
> ಮಾಡಿಕೊಳ್ಳುವುದಿಲ್ಲ.
> 15 ಹೌದು, ಇವರ ಮನಸ್ಸುಗಳು ಕಠಿಣವಾಗಿವೆ. ಕಿವಿ
> ಮಂದವಾಗಿವೆ, ಕಣ್ಣು ಮಬ್ಬಾಗಿವೆ. ಅವರು ತಮ್ಮ
> ಕಣ್ಣುಗಳಿಂದ ನೋಡದಂತೆಯೂ ತಮ್ಮ ಕಿವಿ
> ಗಳಿಂದ ಕೇಳದಂತೆಯೂ ತಮ್ಮ ಮನಸ್ಸುಗಳಿಂದ
> ಅರ್ಥಮಾಡಿಕೊಳ್ಳದಂತೆಯೂ ನನ್ನ ಕಡೆಗೆ
> ತಿರುಗಿಕೊಳ್ಳದಂತೆಯೂ ನನ್ನಿಂದ ಗುಣಹೊಂದ
> ದಂತೆಯೂ ಹೀಗಾಯಿತು.'
>
> *ಯೆಶಾಯ 6:9-10*

16ನೀವಾದರೋ ಧನ್ಯರು. ನಿಮಗೆ ಕಾಣುವ ಸಂಗತಿಗಳನ್ನೂ
ನಿಮಗೆ ಹೇಳುವ ವಿಷಯಗಳನ್ನೂ ಅರ್ಥಮಾಡಿಕೊಳ್ಳಬಲ್ಲಿರಿ.
17 ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ, ನೀವು ಈಗ ನೋಡುವ
ಸಂಗತಿಗಳನ್ನು ನೋಡಲು ಮತ್ತು ಈಗ ನೀವು ಕೇಳುವ
ಸಂಗತಿಗಳನ್ನು ಕೇಳಲು ಅನೇಕ ಪ್ರವಾದಿಗಳು ಮತ್ತು ಒಳ್ಳೆಯ
ಜನರು ಅಪೇಕ್ಷಿಸಿದರು. ಆದರೆ ಅವರಿಗೆ ಸಾಧ್ಯವಾಗಲಿಲ್ಲ.

### ಬಿತ್ತನೆಯ ಕುರಿತು ಯೇಸುವಿನ ವಿವರಣೆ

(ಮಾರ್ಕ 4:13-20; ಲೂಕ 8:11-15)

18''ಹೀಗಿರಲು ಒಕ್ಕಲಿಗನ ಕುರಿತಾದ ಸಾಮ್ಯದ ಅರ್ಥವನ್ನು
ಲಾಲಿಸಿರಿ. 19ಮಗ್ಗುಲಲ್ಲಿ ಬಿದ್ದ ಬೀಜ ಅಂದರೇನು? ಪರ
ಲೋಕರಾಜ್ಯವನ್ನು ಕುರಿತು ಬೋಧಿಸಿದ್ದನ್ನು ಕೇಳಿ ಅದನ್ನು
ಅರ್ಥಮಾಡಿಕೊಳ್ಳದೆ ಇರುವ ಮನುಷ್ಯನೇ ಬೀಜಬಿದ್ದ ದಾರಿ
ಮಗ್ಗುಲಾಗಿರುವನು. ಆ ಕೆಡುಕನು (ಸೈತಾನನು) ಬಂದು ಆ
ಮನುಷ್ಯನ ಹೃದಯದಲ್ಲಿ ಬಿತ್ತಿದ್ದ ಬೀಜಗಳನ್ನು ತೆಗೆದು
ಹಾಕುತ್ತಾನೆ. 20ಬಂಡೆನೆಲದ ಮೇಲೆ ಬಿದ್ದಬೀಜ ಅಂದರೇನು?
ಬೋಧನೆಯನ್ನು ಕೇಳಿದ ಕೂಡಲೇ ಅದನ್ನು ಸಂತೋಷದಿಂದ
ಅಂಗೀಕರಿಸುವ ಮನುಷ್ಯನೇ ಬೀಜಬಿದ್ದ ಬಂಡೆನೆಲವಾಗಿ
ರುವನು. 21ಆದರೆ ಆ ಮನುಷ್ಯನು ಬೋಧನೆಯನ್ನು ತನ್ನ
ಜೀವಿತದಲ್ಲಿ ಬೇರೂರಿಸಿಕೊಳ್ಳುವುದಿಲ್ಲ. ಅವನು ಆ ಬೋಧನೆ
ಯನ್ನು ಸ್ವಲ್ಪಕಾಲ ಮಾತ್ರ ಅನುಸರಿಸುವನು. ಆ ಬೋಧನೆ
ಯನ್ನು ಅಂಗೀಕರಿಸಿದ್ದರಿಂದ ತನಗೆ ಕಷ್ಟವಾಗಲಿ ಹಿಂಸೆಯಾಗಲಿ
ಬಂದಾಗ ಅದನ್ನು ಬೇಗನೆ ಬಿಟ್ಟುಬಿಡುವನು. 22ಮುಳ್ಳುಗಿಡಗಳ
ನಡುವೆ ಬಿದ್ದಬೀಜ ಅಂದರೇನು? ಬೋಧನೆಯನ್ನು ಕೇಳಿ
ದರೂ ಜೀವನದ ಚಿಂತೆಗಳಿಂದ ಮತ್ತು ಹಣದ ಮೇಲಿನ ಪ್ರೀತಿ
ಯಿಂದ ಬೋಧನೆಯನ್ನು ತನ್ನಲ್ಲಿ ಬೆಳೆಯದಂತೆ ಮಾಡುವವನೇ
ಬೀಜಬಿದ್ದ ಮುಳ್ಳುಗಿಡಗಳ ನೆಲವಾಗಿರುವನು. ಆದ್ದರಿಂದ
ಬೋಧನೆಯು ಆ ಮನುಷ್ಯನ ಜೀವಿತದಲ್ಲಿ ಫಲ ಕೊಡು
ವುದಿಲ್ಲ. 23ಒಳ್ಳೆಯ ನೆಲದ ಮೇಲೆ ಬಿದ್ದ ಬೀಜ ಅಂದರೇನು?
ಬೋಧನೆಯನ್ನು ಕೇಳಿ ಅದನ್ನು ಅರ್ಥಮಾಡಿಕೊಂಡ
ವ್ಯಕ್ತಿಯೇ ಬೀಜಬಿದ್ದ ಒಳ್ಳೆಯ ನೆಲವಾಗಿರುವನು. ಆ
ಮನುಷ್ಯನು ಬೆಳೆದು ಕೆಲವು ಸಾರಿ ನೂರರಷ್ಟು ಕೆಲವು ಸಾರಿ
ಅರವತ್ತರಷ್ಟು ಮತ್ತು ಕೆಲವು ಸಾರಿ ಮೂವತ್ತರಷ್ಟು ಫಲ
ಕೊಡುವನು.'' ಎಂದು ಹೇಳಿದನು.

### ಗೋಧಿ ಮತ್ತು ಹಣಜಿ ಸಾಮ್ಯ

24ಬಳಿಕ ಯೇಸು ಅವರಿಗೆ ಇನ್ನೊಂದು ಸಾಮ್ಯದ ಮೂಲಕ
ಬೋಧಿಸಿದನು. ಅದೇನೆಂದರೆ: ''ಪರಲೋಕರಾಜ್ಯ ಒಳ್ಳೆಯ
ಬೀಜವನ್ನು ತನ್ನ ಹೊಲದಲ್ಲಿ ಬಿತ್ತಿದ ಒಬ್ಬ ರೈತನಂತಿದೆ. 25ಆ
ರಾತ್ರಿ ಜನರೆಲ್ಲರೂ ನಿದ್ರಿಸುತ್ತಿದ್ದಾಗ ಅವನ ವೈರಿ ಬಂದು
ಗೋಧಿಯ ನಡುವೆ ಹಣಜಿಯನ್ನು ಬಿತ್ತಿ ಹೊರಟುಹೋದನು.
26ಬಳಿಕ ಗೋಧಿ ಬೆಳೆದು ತೆನೆಬಿಟ್ಟಿತು. ಅದರೊಡನೆ ಹಣಜಿ
ಸಹ ಬೆಳೆಯಿತು. 27ಆಗ ಆ ರೈತನ ಸೇವಕರು ಅವನ ಬಳಿಗೆ
ಬಂದು 'ನಿನ್ನ ಹೊಲದಲ್ಲಿ ನೀನು ಒಳ್ಳೆಯ ಬೀಜ ಬಿತ್ತಿದೆ. ಹಣಜಿ
ಎಲ್ಲಿಂದ ಬಂತು?' ಎಂದು ಕೇಳಿದರು. 28ಆ ಮನುಷ್ಯನು, 'ಒಬ್ಬ
ವೈರಿ ಹಣಜಿಯನ್ನು ಬಿತ್ತಿದ್ದಾನೆ.' ಎಂದು ಉತ್ತರಕೊಟ್ಟನು. ಆ
ಸೇವಕರು 'ನಾವು ಹೋಗಿ ಹಣಜಿಗಳನ್ನು ಕೀಳಬೇಕೆ? ಎಂದು
ಕೇಳಿದರು.

29''ಆ ಮನುಷ್ಯನು, 'ಬೇಡ, ಏಕೆಂದರೆ ನೀವು ಹಣಜಿಗಳನ್ನು
ಕೀಳುವಾಗ ಗೋಧಿಯನ್ನು ಸಹ ಕೀಳಬಹುದು. 30ಸುಗ್ಗಿಕಾಲ
ದವರೆಗೆ ಹಣಜಿಯೂ ಗೋಧಿಯೂ ಒಟ್ಟಿಗೆ ಬೆಳೆಯಲಿ.
ಸುಗ್ಗಿಕಾಲದ ಸಮಯದಲ್ಲಿ ನಾನು ಕೆಲಸದವರಿಗೆ, ಮೊದಲು
ಹಣಜಿಗಳನ್ನು ಕೂಡಿಸಿ ಅದನ್ನು ಸುಡುವುದಕ್ಕಾಗಿ ಹೊರೆ ಕಟ್ಟಿ,
ನಂತರ ಗೋಧಿಯನ್ನು ಕೂಡಿಸಿ ಅದನ್ನು ನನ್ನ ಕಣಜಕ್ಕೆ ತನ್ನಿರಿ'
ಎಂದು ಹೇಳಿದನು.''

### ಅನೇಕ ಸಾಮ್ಯಗಳ ಮೂಲಕ ಯೇಸುವಿನ ಉಪದೇಶ

(ಮಾರ್ಕ 4:30-34; ಲೂಕ 13:18-21)

31ನಂತರ ಯೇಸು ಜನರಿಗೆ ಮತ್ತೊಂದು ಸಾಮ್ಯವನ್ನು
ಹೇಳಿದನು: ''ಪರಲೋಕರಾಜ್ಯ ಸಾಸಿವೆ ಕಾಳಿಗೆ ಹೋಲಿಕೆ
ಯಾಗಿದೆ. ಒಬ್ಬನು ಅದನ್ನು ತನ್ನ ಹೊಲದಲ್ಲಿ ಬಿತ್ತಿದನು. 32ಅದು
ಎಲ್ಲಾ ಬೀಜಗಳಿಗಿಂತಲೂ ಸಣ್ಣ ಬೀಜವಾಗಿದೆ. ಆದರೆ ಅದು
ಬೆಳೆದಾಗ ತೋಟದ ಗಿಡಗಳಿಗಿಂತ ದೊಡ್ಡದಾಗಿರುವುದು. ಅದು
ಮರವಾದಾಗ ಪಕ್ಷಿಗಳು ಬಂದು ಅದರ ಕೊಂಬೆಗಳಲ್ಲಿ ಗೂಡು
ಮಾಡಿಕೊಳ್ಳುವಷ್ಟು ದೊಡ್ಡದಾಗಿರುತ್ತದೆ.''

33ಬಳಿಕ ಯೇಸು ಜನರಿಗೆ ಇನ್ನೊಂದು ಸಾಮ್ಯವನ್ನು ಹೇಳಿ
ದನು: ''ಪರಲೋಕರಾಜ್ಯವು ಒಬ್ಬ ಸ್ತ್ರೀ ರೊಟ್ಟಿ ಮಾಡುವುದಕ್ಕೆ
ಒಂದು ದೊಡ್ಡ ಬೋಗುಣಿಯ ಹಿಟ್ಟಿಗೆ ಬೆರೆಸಿದ ಹುಳಿಗೆ
ಹೋಲಿಕೆಯಾಗಿದೆ. ಆ ಹುಳಿಯು ನಾದಿದ ಹಿಟ್ಟನ್ನೆಲ್ಲಾ
ಉಬ್ಬಿಸಿತು.''

34ಯೇಸು ಇವುಗಳನ್ನೆಲ್ಲ ಸಾಮ್ಯಗಳ ಮೂಲಕ ಹೇಳಿದನು.
ಆತನು ಉಪದೇಶಿಸುವಾಗಲ್ಲೆಲ್ಲಾ ಸಾಮ್ಯಗಳನ್ನು ಉಪ

ಯೋಗಿಸುತ್ತಿದ್ದನು. 35ಪ್ರವಾದಿ ಹೇಳಿದ್ದ ಈ ಮಾತು ಇದರಿಂದ
ನೆರವೇರಿತು:

‘‘ನಾನು ಸಾಮ್ಯಗಳ ಮೂಲಕ ಉಪದೇಶಿಸುತ್ತೇನೆ.
ಲೋಕ ಉಂಟಾದಂದಿನಿಂದ ಮರೆಯಾಗಿದ್ದ
ಸಂಗತಿಗಳನ್ನು ನಾನು ಹೇಳುತ್ತೇನೆ.’’
*ಕೀರ್ತನೆ 78:2*

### ಕಠಿಣವಾದ ಸಾಮ್ಯಕ್ಕೆ ಯೇಸುವಿನ ವಿವರಣೆ

36ನಂತರ ಯೇಸು ಜನರನ್ನು ಬಿಟ್ಟು ಮನೆಯೊಳಕ್ಕೆ
ಹೋದನು. ಆತನ ಶಿಷ್ಯರು ಆತನ ಬಳಿಗೆ ಬಂದು, ‘‘ಹೊಲ
ದಲ್ಲಿರುವ ಹಣಜಿಯನ್ನು ಕುರಿತಾದ ಸಾಮ್ಯದ ಅರ್ಥವನ್ನು
ನಮಗೆ ವಿವರಿಸು’’ ಅಂದರು.
37 ಯೇಸು ಹೀಗೆ ಉತ್ತರಿಸಿದನು: ‘‘ಹೊಲದಲ್ಲಿ ಒಳ್ಳೆಯ
ಬೀಜವನ್ನು ಬಿತ್ತುವವನೇ ಮನುಷ್ಯಕುಮಾರನು. 38ಆ ಹೊಲ
ಈ ಲೋಕವಾಗಿದೆ. ಒಳ್ಳೆಯ ಕಾಳುಗಳೇ ಪರಲೋಕ ರಾಜ್ಯಕ್ಕೆ
ಸೇರಿದ ದೇವಮಕ್ಕಳು. ಕೆಡುಕನಿಗೆ ಸಂಬಂಧಪಟ್ಟವರೇ
ಹಣಜಿಗಳು. 39ಹಣಜಿಯನ್ನು ಬಿತ್ತಿದ ವೈರಿಯೇ ಸೈತಾನ. ಸುಗ್ಗಿ
ಕಾಲ ಅಂದರೆ ಲೋಕದ ಅಂತ್ಯಕಾಲ. ಕೂಡಿಸುವ ಕೆಲಸಗಾರರೇ
ದೇವದೂತರು.
40‘‘ಹಣಜಿಗಳನ್ನು ಕಿತ್ತು ಬೆಂಕಿಯಲ್ಲಿ ಸುಟ್ಟುಬಿಡುತ್ತಾರೆ. ಈ
ಲೋಕದ ಅಂತ್ಯದಲ್ಲಿ ಆಗುವಂಥದ್ದು ಇದೇ. 41ಮನುಷ್ಯ
ಕುಮಾರನು ತನ್ನ ದೂತರನ್ನು ಕಳುಹಿಸುವನು. ಆತನ ದೂತರು
ಪಾಪಕ್ಕೆ ಕಾರಣರಾದ ಮತ್ತು ಕೇಡುಮಾಡುವ ಜನರನ್ನೆಲ್ಲ
ಕೂಡಿಸುವರು; ಅವರನ್ನು ಆತನ ರಾಜ್ಯದಿಂದ ಹೊರಗೆ ಹಾಕಿ
42ಬೆಂಕಿಯ ಸ್ಥಳಕ್ಕೆ ಎಸೆದುಬಿಡುವರು. ಅಲ್ಲಿ ಅವರು ಗೋಳಾ
ಡುತ್ತಾ ನೋವಿನಿಂದ ತಮ್ಮ ಹಲ್ಲುಗಳನ್ನು ಕಡಿಯುವರು.
43ಒಳ್ಳೆಯವರಾದರೋ ಸೂರ್ಯನಂತೆ ಪ್ರಕಾಶಿಸುತ್ತಾ ತಮ್ಮ
ತಂದೆಯ ರಾಜ್ಯದಲ್ಲಿರುವರು. ನನಗೆ ಕಿವಿಗೊಡುವ ಜನರೇ,
ಆಲಿಸಿರಿ!

### ನಿಧಿ ಮತ್ತು ಮುತ್ತಿನ ಸಾಮ್ಯಗಳು

44‘‘ಪರಲೋಕರಾಜ್ಯವು ಹೊಲದಲ್ಲಿ ಹೂಳಿಟ್ಟ ನಿಧಿಗೆ
ಹೋಲಿಕೆಯಾಗಿದೆ. ಒಂದು ದಿನ ಒಬ್ಬನು ಆ ನಿಧಿಯನ್ನು ಕಂಡು
ಬಹಳ ಸಂತೋಷದಿಂದ ಅದನ್ನು ಹೊಲದಲ್ಲಿ ಅಡಗಿಸಿಟ್ಟನು.
ಬಳಿಕ ಅವನು ತನ್ನ ಆಸ್ತಿಯನ್ನೆಲ್ಲಾ ಮಾರಿ ಆ ಹೊಲವನ್ನು
ಕೊಂಡುಕೊಂಡನು.
45‘‘ಪರಲೋಕರಾಜ್ಯವು ಶ್ರೇಷ್ಠವಾದ ಮುತ್ತುಗಳನ್ನು
ಹುಡುಕುವ ಒಬ್ಬ ವ್ಯಾಪಾರಿಯಂತಿದೆ. 46ಒಂದು ದಿನ ಆ
ವ್ಯಾಪಾರಿಗೆ ಬಹು ಅಮೂಲ್ಯವಾದ ಒಂದು ಮುತ್ತು ಸಿಕ್ಕಿತು.
ಆಗ ಅವನು ತನ್ನ ಆಸ್ತಿಯನ್ನೆಲ್ಲಾ ಮಾರಿ ಆ ಮುತ್ತನ್ನು ಕೊಂಡು
ಕೊಂಡನು.

### ಮೀನಿನ ಬಲೆಯ ಕುರಿತಾದ ಸಾಮ್ಯ

47‘‘ಪರಲೋಕರಾಜ್ಯವು ಸರೋವರದೊಳಗೆ ಬೀಸಿದ
ಬಲೆಯಂತಿದೆ. ಆ ಬಲೆಗೆ ಅನೇಕ ಜಾತಿಯ ಮೀನುಗಳು ಸಿಕ್ಕಿ
ಕೊಂಡವು. 48ಆಗ ಆ ಬಲೆಯು ತುಂಬಿಹೋಯಿತು. ಬೆಸ್ತರು
ಆ ಬಲೆಯನ್ನು ದಡಕ್ಕೆ ಎಳೆದುಕೊಂಡು ಬಂದು ಒಳ್ಳೆಯ ಮೀನು
ಗಳನ್ನೆಲ್ಲಾ ಪುಟ್ಟಿಗಳಲ್ಲಿ ತುಂಬಿಕೊಂಡು ಕೆಟ್ಟ ಮೀನುಗಳನ್ನು
ಬಿಸಾಡಿದರು. 49ಈ ಪ್ರಪಂಚದ ಅಂತ್ಯದಲ್ಲಿ ಅದೇ ರೀತಿ ಆಗು
ವುದು. ದೇವದೂತರು ಬಂದು ಒಳ್ಳೆಯ ಜನರಿಂದ ಕೆಟ್ಟಜನ
ರನ್ನು ಬೇರೆ ಮಾಡುವರು. 50ದೇವದೂತರು ಬೆಂಕಿಯ ಸ್ಥಳ
ದೊಳಕ್ಕೆ ಕೆಟ್ಟ ಜನರನ್ನು ಎಸೆಯುವರು. ಆ ಸ್ಥಳದಲ್ಲಿ ಜನರು
ಗೋಳಾಡುತ್ತಾ ನೋವಿನಿಂದ ತಮ್ಮ ಹಲ್ಲುಗಳನ್ನು
ಕಡಿಯುವರು.’’
51ಯೇಸು ತನ್ನ ಶಿಷ್ಯರಿಗೆ, ‘‘ನೀವು ಈ ವಿಷಯಗಳನ್ನೆಲ್ಲಾ
ಅರ್ಥಮಾಡಿಕೊಂಡಿರೋ?’’ ಎಂದು ಕೇಳಿದನು. ಅದಕ್ಕೆ
ಶಿಷ್ಯರು, ‘‘ನಾವು ಅರ್ಥಮಾಡಿಕೊಂಡೆವು’’ ಎಂದು ಉತ್ತರ
ಕೊಟ್ಟರು. 52ಆಗ ಯೇಸು ತನ್ನ ಶಿಷ್ಯರಿಗೆ, ‘‘ಹೀಗಿರಲಾಗಿ
ಪರಲೋಕ ರಾಜ್ಯದ ವಿಷಯವಾಗಿ ಬೋಧಿಸಿದಂಥ
ಪ್ರತಿಯೊಬ್ಬ ಧರ್ಮೋಪದೇಶಕನು ಒಂದು ಮನೆಯ
ಯಜಮಾನನಂತಿದ್ದಾನೆ. ಆ ಮನುಷ್ಯನು ಹೊಸವಸ್ತುಗಳನ್ನೂ
ಹಳೆವಸ್ತುಗಳನ್ನೂ ಆ ಮನೆಯಲ್ಲಿ ಶೇಖರಿಸಿಕೊಂಡು
ಅವುಗಳನ್ನು ಹೊರಗೆ ತರುವನು’’ ಎಂದನು.

### ಸ್ವಂತ ಊರಿಗೆ ಯೇಸುವಿನ ಪ್ರಯಾಣ

(ಮಾರ್ಕ 6:1-6; ಲೂಕ 4:16-30)

53ಯೇಸು ಈ ಸಾಮ್ಯಗಳ ಮೂಲಕ ಬೋಧಿಸಿದ ನಂತರ
ಅಲ್ಲಿಂದ ತನ್ನ ಸ್ವಂತ ಊರಿಗೆ ಹೋದನು, 54ಯೇಸು
ಸಭಾಮಂದಿರದಲ್ಲಿ ಬೋಧಿಸಿದಾಗ ಜನರು ಬೆರಗಾಗಿ, ‘‘ಈ
ಜ್ಞಾನವನ್ನು ಮತ್ತು ಅದ್ಭುತಕಾರ್ಯಗಳನ್ನು ಮಾಡುವ ಈ
ಶಕ್ತಿಯನ್ನು ಎಲ್ಲಿಂದ ಪಡೆದುಕೊಂಡನು? 55ಇವನು ಕೇವಲ
ಆ ಬಡಗಿಯ ಮಗನಲ್ಲವೇ? ಇವನ ತಾಯಿ ಮರಿಯಳು.
ಯಾಕೋಬ, ಯೋಸೇಫ, ಸಿಮೋನ ಮತ್ತು ಯೂದ ಇವನ
ಸಹೋದರರು. 56ಅವನ ಸಹೋದರಿಯರೆಲ್ಲರೂ ನಮ್ಮಲ್ಲಿ
ಇದ್ದಾರೆ. ಹೀಗಿರಲು ಇವನು ಈ ಜ್ಞಾನವನ್ನು ಮತ್ತು ಅದ್ಭುತ
ಕಾರ್ಯಗಳನ್ನು ಮಾಡುವ ಈ ಶಕ್ತಿಯನ್ನು ಎಲ್ಲಿಂದ ಪಡೆದು
ಕೊಂಡನು?’’ ಎಂದು ಮಾತಾಡಿಕೊಂಡು, 57ಆತನನ್ನು
ಸ್ವೀಕರಿಸಿಕೊಳ್ಳಲಿಲ್ಲ.
ಯೇಸು ಅವರಿಗೆ, ‘‘ಪ್ರವಾದಿಗೆ ಪರಜನರು ಮರ್ಯಾದೆ
ಸಲ್ಲಿಸುತ್ತಾರೆ; ಆದರೆ ಸ್ವಂತ ಊರಿನವರಾಗಲಿ ಸ್ವಂತ ಮನೆಯವ
ರಾಗಲಿ ಮರ್ಯಾದೆ ಕೊಡುವದಿಲ್ಲ’’ ಎಂದು ಹೇಳಿದನು.
58ಆ ಜನರ ಅವಿಶ್ವಾಸದ ಕಾರಣ ಆತನು ಅಲ್ಲಿ ಅನೇಕ ಅದ್ಭುತ
ಕಾರ್ಯಗಳನ್ನು ಮಾಡಲಿಲ್ಲ.

### ಯೇಸುವಿನ ಕುರಿತು ಹೆರೋದನ ಅಭಿಪ್ರಾಯ

(ಮಾರ್ಕ 6:14-29; ಲೂಕ 9:7-9)

14 ಆ ಕಾಲದಲ್ಲಿ ಹೆರೋದನು ಗಲಿಲಾಯದಲ್ಲಿ
ಆಳುತ್ತಿದ್ದನು. ಜನರು ಯೇಸುವಿನ ಕುರಿತು
ಹೇಳುತ್ತಿದ್ದ ಸಂಗತಿಗಳೆಲ್ಲ ಅವನಿಗೆ ತಿಳಿಯಿತು. 2ಆದ್ದರಿಂದ
ಹೆರೋದನು ತನ್ನ ಸೇವಕರಿಗೆ, ‘‘ನಿಜವಾಗಿಯೂ ಯೇಸುವೇ
ಸ್ನಾನಿಕ ಯೋಹಾನನು. ಅವನು ಮತ್ತೆ ಜೀವಂತವಾಗಿ ಬಂದಿ
ದ್ದಾನೆ. ಆದಕಾರಣವೇ ಅವನು ಈ ಅದ್ಭುತಕಾರ್ಯಗಳನ್ನು
ಮಾಡಲು ಶಕ್ತನಾಗಿದ್ದಾನೆ’’ ಎಂದು ಹೇಳಿದನು.

## ಸ್ನಾನಿಕ ಯೋಹಾನನು ಕೊಲ್ಲಲ್ಪಟ್ಟ ರೀತಿ

3ಈ ಸಮಯಕ್ಕೆ ಮೊದಲೇ ಹೆರೋದ್ಯಳ ನಿಮಿತ್ತವಾಗಿ
ಹೆರೋದನು ಯೋಹಾನನನ್ನು ಸರಪಣಿಗಳಿಂದ ಬಂಧಿಸಿ, ಸೆರೆ
ಮನೆಯಲ್ಲಿ ಹಾಕಿಸಿದ್ದನು. ಹೆರೋದ್ಯಳು ಹೆರೋದನ
ಸಹೋದರನಾದ ಫಿಲಿಪ್ಪನ ಹೆಂಡತಿ. 4ಯೋಹಾನನು
ಹೆರೋದನಿಗೆ, ''ಹೆರೋದ್ಯಳನ್ನು ನೀನು ಇಟ್ಟುಕೊಂಡಿರು
ವುದು ಸರಿಯಲ್ಲ'' ಎಂದು ಹೇಳುತ್ತಿದ್ದುದೇ ಈ ಸೆರೆವಾಸಕ್ಕೆ
ಕಾರಣ.

5ಹೆರೋದನು ಯೋಹಾನನನ್ನು ಕೊಲ್ಲಿಸಬೇಕೆಂದಿದ್ದರೂ
ಜನರಿಗೆ ಭಯಪಟ್ಟು ಕೊಲ್ಲಿಸಿರಲಿಲ್ಲ. ಜನರು ಯೋಹಾನನನ್ನು
ಒಬ್ಬ ಪ್ರವಾದಿಯೆಂದು ನಂಬಿದ್ದರು.

6ಹೆರೋದನ ಹುಟ್ಟುಹಬ್ಬದ ದಿನದಂದು ಹೆರೋದ್ಯಳ
ಮಗಳು ಹೆರೋದನ ಮತ್ತು ಅವನ ಅತಿಥಿಗಳ ಮುಂದೆ
ನರ್ತಿಸಿದಳು. ಹೆರೋದನು ಅವಳನ್ನು ಬಹಳ ಮೆಚ್ಚಿಕೊಂಡನು.
7ಆದ್ದರಿಂದ ಅವನು, ''ನಿನಗೆ ಏನು ಬೇಕಾದರೂ ನಾನು ಕೊಡು
ತ್ತೇನೆ'' ಎಂದು ಅವಳಿಗೆ ವಾಗ್ದಾನ ಮಾಡಿದನು. 8ಏನು ಕೇಳಿ
ಕೊಳ್ಳಬೇಕೆಂದು ಹೆರೋದ್ಯಳು ತನ್ನ ಮಗಳಿಗೆ ಹೇಳಿಕೊಟ್ಟಳು.
ಆದ್ದರಿಂದ ಅವಳು ಹೆರೋದನಿಗೆ, ''ಸ್ನಾನಿಕ ಯೋಹಾನನ
ತಲೆಯನ್ನು ಇಲ್ಲಿಯೇ ಈ ತಟ್ಟೆಯ ಮೇಲೆಯೇ ನನಗೆ
ಕೊಡು''ಎಂದು ಹೇಳಿದಳು. 9ರಾಜ ಹೆರೋದನು ಬಹಳವಾಗಿ
ದುಃಖಪಟ್ಟನು. ಆದರೆ ಏನು ಕೇಳಿದರೂ ಕೊಡುತ್ತೇನೆಂದು
ಅವನು ಅವಳಿಗೆ ವಾಗ್ದಾನ ಮಾಡಿದ್ದನು. ಹೆರೋದನ
ಪಂಕ್ತಿಯಲ್ಲಿ ಊಟ ಮಾಡುತ್ತಿದ್ದವರು ಸಹ ಆ ವಾಗ್ದಾನವನ್ನು
ಕೇಳಿಸಿಕೊಂಡಿದ್ದರು. ಆದ್ದರಿಂದ ಅವಳು ಕೇಳಿದ್ದನ್ನು ಕೊಡು
ವುದಕ್ಕೆ ಹೆರೋದನು ಅಪ್ಪಣೆಕೊಟ್ಟನು. 10ಸೆರೆಮನೆಗೆ ಹೋಗಿ
ಯೋಹಾನನ ತಲೆಯನ್ನು ಕತ್ತರಿಸಿಕೊಂಡು ಬರಲು ಅವನು
ಸೈನಿಕರನ್ನು ಕಳುಹಿಸಿಕೊಟ್ಟನು. 11ಅವರು ಯೋಹಾನನ ತಲೆ
ಯನ್ನು ತಟ್ಟೆಯ ಮೇಲೆ ತಂದು ಅವಳಿಗೆ ಕೊಟ್ಟರು. ಅವಳು
ಅದನ್ನು ತನ್ನ ತಾಯಿಯಾದ ಹೆರೋದ್ಯಳ ಬಳಿಗೆ ತೆಗೆದು
ಕೊಂಡು ಹೋದಳು. 12ಯೋಹಾನನ ಶಿಷ್ಯರು ಬಂದು ಅವನ
ದೇಹವನ್ನು ತೆಗೆದುಕೊಂಡು ಹೋಗಿ ಸಮಾಧಿ ಮಾಡಿದರು.
ಬಳಿಕ ಅವರು ಯೇಸುವಿನ ಬಳಿಗೆ ಹೋಗಿ ಸಂಭವಿಸಿದ್ದನ್ನೆಲ್ಲ
ತಿಳಿಸಿದರು.

## ಐದು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮಾರ್ಕ 6:30-44; ಲೂಕ 9:10-17; ಯೋಹಾನ 6:1-:14)

13ಯೋಹಾನನಿಗೆ ಸಂಭವಿಸಿದ್ದನ್ನು ಕೇಳಿದಾಗ ಯೇಸು
ದೋಣಿಹತ್ತಿ ನಿರ್ಜನವಾದ ಸ್ಥಳಕ್ಕೆ ಒಬ್ಬನೇ ಹೋದನು. ಆದರೆ
ಈ ಸುದ್ದಿ ಜನರಿಗೆ ತಿಳಿಯಿತು. ಆದ್ದರಿಂದ ಅವರು ತಮ್ಮ
ಊರುಗಳನ್ನು ಬಿಟ್ಟು ಕಾಲುನಡಿಗೆಯಲ್ಲೇ ಆತನಿದ್ದ ಸ್ಥಳಕ್ಕೆ
ಹೋದರು. 14ಯೇಸು ಅಲ್ಲಿಗೆ ಬಂದಾಗ, ಜನರು ಗುಂಪು
ಗುಂಪಾಗಿ ನೆರೆದಿರುವುದನ್ನು ಕಂಡು ಅವರಿಗಾಗಿ ದುಃಖಪಟ್ಟು
ಕಾಯಿಲೆಯವರನ್ನು ಗುಣಪಡಿಸಿದನು.

15ಸಂಜೆಯಾದಾಗ, ಶಿಷ್ಯರು ಯೇಸುವಿನ ಬಳಿಗೆ ಬಂದು,
''ಈ ಸ್ಥಳದಲ್ಲಿ ಜನರು ವಾಸಿಸುವುದಿಲ್ಲ. ಈಗಾಗಲೇ ಸಮಯ
ವಾಗಿದೆ. ಜನರು ತಮಗಾಗಿ ಆಹಾರವನ್ನು ಕೊಂಡುಕೊಳ್ಳಲು
ಅವರನ್ನು ಊರುಗಳಿಗೆ ಕಳುಹಿಸಿಬಿಡು'' ಎಂದು ಹೇಳಿದರು.

16ಯೇಸು, ''ಜನರು ಹೋಗುವುದು ಬೇಡ. ನೀವೇ ಅವರಿಗೆ
ಸ್ವಲ್ಪ ಊಟವನ್ನು ಕೊಡಿ.'' ಎಂದು ಹೇಳಿದನು.

17ಆಗ ಶಿಷ್ಯರು, ''ನಮ್ಮಲ್ಲಿ ಐದು ರೊಟ್ಟಿ ಮತ್ತು ಎರಡು
ಮೀನುಗಳು ಮಾತ್ರ ಇವೆ'' ಎಂದು ಉತ್ತರ ಕೊಟ್ಟರು.

18ಯೇಸು, ''ಆ ರೊಟ್ಟಿ ಮತ್ತು ಮೀನುಗಳನ್ನು ನನ್ನ ಬಳಿಗೆ
ತನ್ನಿರಿ'' ಅಂದನು. 19ಬಳಿಕ ಆತನು ಜನರಿಗೆ ಹುಲ್ಲಿನ ಮೇಲೆ
ಕುಳಿತುಕೊಳ್ಳುವುದಕ್ಕೆ ಹೇಳಿ ಐದು ರೊಟ್ಟಿ ಮತ್ತು ಎರಡು
ಮೀನುಗಳನ್ನು ತೆಗೆದುಕೊಂಡು, ಆಕಾಶದ ಕಡೆಗೆ ನೋಡಿ,
ಅವುಗಳಿಗಾಗಿ ದೇವರಿಗೆ ಸ್ತೋತ್ರಸಲ್ಲಿಸಿ, ರೊಟ್ಟಿಯನ್ನು
ಮುರಿದು ತನ್ನ ಶಿಷ್ಯರಿಗೆ ಕೊಟ್ಟನು. ಶಿಷ್ಯರು ರೊಟ್ಟಿಯನ್ನು
ಜನರಿಗೆ ಹಂಚಿದರು. 20ಜನರೆಲ್ಲರೂ ತಿಂದು ತೃಪ್ತರಾದರು.
ಜನರು ತಿಂದು ಮುಗಿಸಿದ ನಂತರ, ತಿನ್ನಲಾರದೆ ಉಳಿಸಿದ
ಚೂರುಗಳನ್ನು ಶಿಷ್ಯರು ಶೇಖರಿಸಿದಾಗ ಹನ್ನೆರಡು ಬುಟ್ಟಿಗಳು
ತುಂಬಿ ಹೋದವು. 21ಊಟ ಮಾಡಿದವರಲ್ಲಿ ಹೆಂಗಸರು ಮತ್ತು
ಮಕ್ಕಳನ್ನು ಬಿಟ್ಟರೆ, ಗಂಡಸರೇ ಸುಮಾರು ಐದು ಸಾವಿರ
ಇದ್ದರು.

## ಸರೋವರದ ಮೇಲೆ ಯೇಸುವಿನ ಕಾಲುನಡಿಗೆ

(ಮಾರ್ಕ 6:45-52; ಯೋಹಾನ 6:15-21)

22ಬಳಿಕ ಯೇಸು ತನ್ನ ಶಿಷ್ಯರಿಗೆ, ''ನಾನು ಈ ಜನರನ್ನು
ಬೀಳ್ಕೊಟ್ಟು ಬರುತ್ತೇನೆ. ನೀವು ಈಗಲೇ ದೋಣಿ ಹತ್ತಿಕೊಂಡು
ಸರೋವರದ ಆಚೆದಡಕ್ಕೆ ಹೋಗಿರಿ'' ಎಂದು ಹೇಳಿ ಕಳುಹಿಸಿ
ದನು. 23ಆತನು ಜನರಿಗೆ ಶುಭವನ್ನು ಕೋರಿ ಕಳುಹಿಸಿದ ನಂತರ
ಪ್ರಾರ್ಥನೆ ಮಾಡುವುದಕ್ಕಾಗಿ ತಾನೊಬ್ಬನೇ ಬೆಟ್ಟದ ಮೇಲಕ್ಕೆ
ಹೋದನು. ಆಗಲೇ ರಾತ್ರಿಯಾಗಿತ್ತು. ಅಲ್ಲಿ ಆತನೊಬ್ಬನೇ
ಇದ್ದನು. 24ಅಷ್ಟರಲ್ಲಿ ದೋಣಿಯು ಸರೋವರದ ಮೇಲೆ ಬಹಳ
ದೂರ ಹೋಗಿತ್ತು. ಎದುರುಗಾಳಿಯಿಂದ ಅಲೆಗಳ ಬಡಿತಕ್ಕೆ
ಸಿಕ್ಕಿಹಾಕಿಕೊಂಡಿತ್ತು.

25ಆ ರಾತ್ರಿಯ ಕಡೇ ಜಾವದ ಸಮಯದಲ್ಲಿ ಆತನ ಶಿಷ್ಯರು
ದೋಣಿಯಲ್ಲೇ ಇದ್ದರು. ಆತನು ಸರೋವರದ ನೀರಿನ ಮೇಲೆ
ನಡೆಯುತ್ತಾ ಅವರ ಬಳಿಗೆ ಬರತೊಡಗಿದನು. 26ನೀರಿನ ಮೇಲೆ
ನಡೆದುಕೊಂಡು ಬರುತ್ತಿದ್ದ ಆತನನ್ನು ಕಂಡ ಶಿಷ್ಯರು ಭೂತ
ವೆಂದು ಭಾವಿಸಿ ಭಯದಿಂದ ಕೂಗಿಕೊಂಡರು.

27ಕೂಡಲೇ ಯೇಸು, ''ಚಿಂತಿಸಬೇಡಿ! ನಾನೇ! ಭಯಪಡ
ಬೇಡಿ'' ಎಂದು ಅವರೊಂದಿಗೆ ಮಾತಾಡಿದನು.

28ಪೇತ್ರನು, ''ಪ್ರಭುವೇ, ನಿಜವಾಗಿಯೂ ನೀನೇ ಆಗಿದ್ದರೆ,
ನೀರಿನ ಮೇಲೆ ನಡೆದುಕೊಂಡು ನಿನ್ನ ಬಳಿಗೆ ಬರಲು ನನಗೆ
ಆಜ್ಞಾಪಿಸು'' ಎಂದನು.

29ಯೇಸು, ''ಪೇತ್ರನೇ, ಬಾ'' ಅಂದನು.

ಕೂಡಲೆ ಪೇತ್ರನು ದೋಣಿಯಿಂದ ಯೇಸುವಿನ ಬಳಿಗೆ
ನೀರಿನ ಮೇಲೆ ನಡೆದನು. 30ಆದರೆ ಅವನು ಗಾಳಿಯನ್ನು ಮತ್ತು
ಅಲೆಗಳನ್ನು ನೋಡಿ ಭಯಪಟ್ಟದ್ದರಿಂದ ನೀರಿನಲ್ಲಿ ಮುಳುಗ
ತೊಡಗಿ, ''ಪ್ರಭುವೇ, ನನ್ನನ್ನು ರಕ್ಷಿಸು'' ಎಂದು ಕೂಗಿ
ಕೊಂಡನು.

31ಯೇಸು ತನ್ನ ಕೈ ಚಾಚಿ ಪೇತ್ರನನ್ನು ಹಿಡಿದುಕೊಂಡನು.
ಯೇಸು, ''ಅಲ್ಪವಿಶ್ವಾಸಿಯೇ, ಏಕೆ ಸಂದೇಹಪಟ್ಟೆ?'' ಎಂದನು.
32ಪೇತ್ರನು ಮತ್ತು ಯೇಸು ದೋಣಿ ಹತ್ತಿದ ಮೇಲೆ ಗಾಳಿ

ಶಾಂತವಾಯಿತು. 33ದೋಣಿಯಲ್ಲಿದ್ದ ಶಿಷ್ಯರು ಯೇಸುವನ್ನು
ಆರಾಧಿಸಿ, ''ನೀನು ನಿಜವಾಗಿಯೂ ದೇವರ ಮಗನು'' ಎಂದು
ಹೇಳಿದರು.

34ಅವರು ಸರೋವರವನ್ನು ದಾಟಿ ಗೆನೆಸರೇತ್ ದಡಕ್ಕೆ
ಬಂದರು. 35ಅಲ್ಲಿದ್ದ ಜನರು ಯೇಸುವನ್ನು ನೋಡಿದರು.
ಆತನು ಯಾರೆಂಬುದು ಅವರಿಗೆ ತಿಳಿದಿತ್ತು. ಆದ್ದರಿಂದ ಅವರು
ಸುತ್ತಮುತ್ತಲಿನ ಪ್ರದೇಶದ ಜನರಿಗೆ ಯೇಸು ಬಂದಿದ್ದಾನೆ
ಎಂದು ತಿಳಿಸಿದರು. ಜನರು ರೋಗಗಳಿಂದ ಬೇನೆಗಳಿಂದ
ನರಳುತ್ತಿದ್ದವರನ್ನೆಲ್ಲ ಆತನ ಬಳಿಗೆ ತಂದರು. 36ಆತನ ಮೇಲಂಗಿ
ಯನ್ನಾದರೂ ಮುಟ್ಟಿ ಗುಣಹೊಂದಲು ಅವಕಾಶಕೊಡ
ಬೇಕೆಂದು ಅವರು ಬೇಡಿಕೊಂಡರು. ಆತನ ಮೇಲಂಗಿಯನ್ನು
ಮುಟ್ಟಿದ ಜನರೆಲ್ಲರೂ ಗುಣ ಹೊಂದಿದರು.

### ದೇವರ ಆಜ್ಞೆ ಮತ್ತು ಮನುಷ್ಯರ ನಿಯಮ
(ಮಾರ್ಕ 7:1-23)

15 ಆಗ ಕೆಲವು ಫರಿಸಾಯರು ಮತ್ತು ಧರ್ಮೋಪ
ದೇಶಕರು ಜೆರುಸಲೇಮಿನಿಂದ ಯೇಸುವಿನ ಬಳಿಗೆ
ಬಂದು, 2''ನಮ್ಮ ಪೂರ್ವಿಕರಿಂದ ಬಂದ ಸಂಪ್ರದಾಯಗಳಿಗೆ
ನಿನ್ನ ಶಿಷ್ಯರು ಏಕೆ ವಿಧೇಯರಾಗಿರುವುದಿಲ್ಲ? ನಿನ್ನ ಶಿಷ್ಯರು
ಊಟ ಮಾಡುವುದಕ್ಕೆ ಮುಂಚೆ ಕೈ ತೊಳೆಯುವುದಿಲ್ಲವೇಕೆ?''
ಎಂದು ಕೇಳಿದರು.

3ಯೇಸು, ''ನಿಮ್ಮ ಸಂಪ್ರದಾಯಗಳನ್ನು ಅನುಸರಿಸಲು
ದೇವರ ಆಜ್ಞೆಗೆ ಅವಿಧೇಯರಾಗುವುದೇಕೆ? 4'ನಿಮ್ಮ ತಂದೆ
ತಾಯಿಗಳಿಗೆ ಗೌರವ ನೀಡಿ'* ಎಂಬುದು ದೇವರ ಆಜ್ಞೆ.
'ಯಾವನಾದರೂ ತನ್ನ ತಂದೆಯನ್ನಾಗಲಿ ತಾಯಿಯನ್ನಾಗಲಿ
ಹೀನೈಸಿದರೆ ಅವನನ್ನು ಕೊಲ್ಲಬೇಕು'* ಎಂಬುದೂ ದೇವರ
ಆಜ್ಞೆ. 5ಆದರೆ ಒಬ್ಬ ವ್ಯಕ್ತಿಯು ತನ್ನ ತಂದೆಗಾಗಲಿ ತಾಯಿಗಾಗಲಿ
'ನಿಮಗೆ ಸಹಾಯ ಮಾಡಲು ನನಗೆ ಸಾಧ್ಯವಿಲ್ಲ, ಏಕೆಂದರೆ
ನನ್ನಲ್ಲಿರುವ ಪ್ರತಿಯೊಂದೂ ದೇವರಿಗೆ ಪ್ರತಿಷ್ಠಿತವಾಗಿದೆ'
ಎಂದು ಹೇಳಿದರೆ, 6ಅವನು ತನ್ನ ತಂದೆಯನ್ನು ಗೌರವಿಸ
ಬೇಕಿಲ್ಲ ಎಂದು ನೀವು ಬೋಧಿಸುತ್ತೀರಿ. ಹೀಗಿರಲು ನಿಮ್ಮ
ಸಂಪ್ರದಾಯವೇ ದೇವರ ಆಜ್ಞೆಯನ್ನು ತಳ್ಳಿಹಾಕಿದೆ. 7ನೀವು
ಕಪಟಿಗಳು. ಯೆಶಾಯನು ನಿಮ್ಮನ್ನು ಕುರಿತು ಸರಿಯಾಗಿ ಹೇಳಿ
ದ್ದಾನೆ. ಅದೇನೆಂದರೆ:

8 'ಇವರು ನನ್ನನ್ನು ಮಾತಿನಿಂದ ಗೌರವಿಸುತ್ತಾರೆ.
ಇವರ ಮನಸ್ಸಾದರೊ ನನಗೆ ದೂರವಾಗಿದೆ.
9 ಇವರು ನನ್ನನ್ನು ಆರಾಧಿಸುವುದೂ ನಿರರ್ಥಕ.
ಇವರು ಮನುಷ್ಯರ ಕಟ್ಟಳೆಗಳನ್ನೇ ಉಪ
ದೇಶಿಸುತ್ತಾರೆ.''

*ಯೆಶಾಯ 29:13*

10ಯೇಸು ಜನರನ್ನು ತನ್ನ ಬಳಿಗೆ ಕರೆದು, ''ನಾನು ಹೇಳು
ವುದನ್ನು ಆಲಿಸಿರಿ ಮತ್ತು ಅರ್ಥ ಮಾಡಿಕೊಳ್ಳಿರಿ. 11ಒಬ್ಬನು
ಕಲುಷಿತನಾಗುವುದು ತನ್ನ ಬಾಯಿಂದ ತಿನ್ನುವ ಪದಾರ್ಥ
ಗಳಿಂದಲ್ಲ. ಅವನ ಬಾಯಿಂದ ಬರುವ ಕೆಟ್ಟಮಾತುಗಳೇ
ಅವನನ್ನು ಕಲುಷಿತಗೊಳಿಸುತ್ತವೆ'' ಎಂದು ಹೇಳಿದನು.

12ಆಗ ಶಿಷ್ಯರು ಯೇಸುವಿನ ಬಳಿಗೆ ಬಂದು, ''ನೀನು
ಹೇಳಿದ್ದನ್ನು ಕೇಳಿ ಫರಿಸಾಯರು ಬೇಸರಗೊಂಡದ್ದು ನಿನಗೆ
ತಿಳಿಯಿತೋ?'' ಎಂದು ಕೇಳಿದರು.

13ಯೇಸು, ''ಪರಲೋಕದಲ್ಲಿರುವ ನನ್ನ ತಂದೆ ನೆಡದಿರುವ
ಪ್ರತಿಯೊಂದು ಗಿಡವನ್ನು ಬೇರಿನೊಂದಿಗೆ ಕಿತ್ತುಹಾಕಲಾಗು
ವುದು. 14ಫರಿಸಾಯರಿಂದ ದೂರವಾಗಿರಿ. ಅವರೇ ಕುರುಡರು,
ಮತ್ತೊಬ್ಬರಿಗೆ ದಾರಿ ತೋರಿಸಲು ಹೋಗುತ್ತಾರೆ. ಕುರುಡನು
ಕುರುಡನಿಗೆ ದಾರಿ ತೋರಿಸಿದರೆ ಅವರಿಬ್ಬರೂ ಹಳ್ಳದಲ್ಲಿ
ಬೀಳುವರು'' ಎಂದು ಉತ್ತರ ಕೊಟ್ಟನು.

15ಆಗ ಪೇತ್ರನು, ''ನೀನು ಜನರಿಗೆ ಮೊದಲು ಹೇಳಿದ್ದನ್ನು
ನಮಗೆ ವಿವರಿಸು'' ಎಂದನು.

16ಯೇಸು, ''ನಿಮಗೆ ಇನ್ನೂ ಅರ್ಥವಾಗುವುದಿಲ್ಲವೇ?
17ಒಬ್ಬ ಮನುಷ್ಯನ ಬಾಯಿಂದ ಆಹಾರ ಹೊಟ್ಟೆಯೊಳಕ್ಕೆ
ಹೋಗುತ್ತದೆ. ನಂತರ ಅದು ದೇಹದಿಂದ ಹೊರಗೆ ಹೋಗಿ
ಬಿಡುತ್ತದೆ. ಇದು ನಿಮಗೆ ತಿಳಿದೇ ಇದೆ. 18ಆದರೆ ಒಬ್ಬ
ಮನುಷ್ಯನ ಬಾಯಿಂದ ಹೊರಡುವ ಕೆಟ್ಟಮಾತುಗಳು ಅವನ
ಆಲೋಚನೆಯಿಂದ ಉದ್ಭವಿಸಿ ಅವನನ್ನು ಅಶುದ್ಧನನ್ನಾಗಿ
ಮಾಡುತ್ತವೆ. 19ಮನುಷ್ಯನ ಮನಸ್ಸಿನಲ್ಲಿ ದುರಾಲೋಚನೆ,
ಕೊಲೆ, ವ್ಯಭಿಚಾರ, ಸೂಳೆಗಾರಿಕೆ, ಕಳ್ಳತನ, ಸುಳ್ಳುಸಾಕ್ಷಿ ಮತ್ತು
ಬೈಗಳು ಹೊರಟು ಬರುತ್ತವೆ. 20ಇವು ಮನುಷ್ಯನನ್ನು ಅಶುದ್ಧ
ನನ್ನಾಗಿ ಮಾಡುತ್ತವೆ. ಆದರೆ ಊಟಕ್ಕೆ ಮೊದಲು ಕೈತೊಳೆಯದ
ಮಾತ್ರಕ್ಕೆ ಮನುಷ್ಯನೇನೂ ಅಶುದ್ಧನಾಗುವುದಿಲ್ಲ'' ಎಂದು
ಹೇಳಿದನು.

### ಯೆಹೂದ್ಯಳಲ್ಲದ ಸ್ತ್ರೀಗೆ ಯೇಸು ಮಾಡಿದ ಸಹಾಯ
(ಮಾರ್ಕ 7:24-30)

21ಯೇಸು ಆ ಸ್ಥಳವನ್ನುಬಿಟ್ಟು ಟೈರ್ ಮತ್ತು ಸಿದೋನ್‌ಗಳ
ಸುತ್ತಮುತ್ತಲಿನ ಪ್ರದೇಶಕ್ಕೆ ಹೋದನು. 22ಆ ಸ್ಥಳದಿಂದ
ಕಾನಾನ್ಯಳಾದ ಒಬ್ಬ ಸ್ತ್ರೀ ಯೇಸುವಿನ ಬಳಿಗೆ ಬಂದು,
''ಪ್ರಭುವೇ, ದಾವೀದನ ಮಗನೇ, ದಯವಿಟ್ಟು ನನಗೆ ಕರುಣೆ
ತೋರು! ನನ್ನ ಮಗಳಲ್ಲಿ ದೆವ್ವ ಸೇರಿಕೊಂಡಿದೆ ಮತ್ತು ಆಕೆ ಬಹಳ
ಸಂಕಟಪಡುತ್ತಿದ್ದಾಳೆ'' ಎಂದು ಗಟ್ಟಿಯಾಗಿ ಕೂಗಿಕೊಂಡಳು.

23ಆದರೆ ಯೇಸು ಆ ಸ್ತ್ರೀಗೆ ಉತ್ತರ ಕೊಡಲಿಲ್ಲ. ಆದ್ದರಿಂದ
ಶಿಷ್ಯರು ಯೇಸುವಿನ ಬಳಿಗೆ ಬಂದು, ''ಆ ಸ್ತ್ರೀಗೆ ಹೊರಟು
ಹೋಗುವುದಕ್ಕೆ ಹೇಳು. ಆಕೆಯು ಕೂಗಿಕೊಂಡು ನಮ್ಮ
ಹಿಂದೆಯೇ ಬರುತ್ತಿದ್ದಾಳೆ'' ಎಂದು ಕೇಳಿಕೊಂಡರು.

24ಯೇಸು, ''ತಪ್ಪಿಸಿಕೊಂಡ ಕುರಿಗಳಂತಿರುವ ಇಸ್ರೇಲರ
ಬಳಿಗೆ ಮಾತ್ರ ದೇವರು ನನ್ನನ್ನು ಕಳುಹಿಸಿದನು'' ಎಂದನು.

25ಆಗ ಆ ಸ್ತ್ರೀಯು ಯೇಸುವಿನ ಬಳಿಗೆ ಬಂದು ಆತನ ಮುಂದೆ
ಅಡ್ಡಬಿದ್ದು, ''ಪ್ರಭುವೇ, ನನಗೆ ಸಹಾಯ ಮಾಡು'' ಎಂದು
ಕೇಳಿದಳು.

26ಯೇಸು, ''ಮಕ್ಕಳು ತಿನ್ನುವ ರೊಟ್ಟಿಯನ್ನು ತೆಗೆದು
ಕೊಂಡು ನಾಯಿಗಳಿಗೆ ಕೊಡುವುದು ಸರಿಯಲ್ಲ'' ಎಂದು
ಉತ್ತರ ಕೊಟ್ಟನು.

---

**ನಿಮ್ಮ ...ನೀಡಿ** ವಿಮೋಚನ. 20 : 12 ಧರ್ಮೋಪದೇಶ. 5:16

**ಯಾವನಾದರೂ ... ಕೊಲ್ಲಬೇಕು** ವಿಮೋಚನ 21:17.

27ಆ ಸ್ತ್ರೀಯು, ‘‘ಹೌದು ಪ್ರಭುವೇ, ಆದರೂ ನಾಯಿಗಳು ತಮ್ಮ ಯಜಮಾನರ ಮೇಜಿನಿಂದ ಬೀಳುವ ಆಹಾರದ ತುಂಡುಗಳನ್ನು ತಿನ್ನುತ್ತವೆಯಲ್ಲಾ’’ ಎಂದಳು.

28ಆಗ ಯೇಸು, ‘‘ಅಮ್ಮಾ, ನಿನ್ನ ನಂಬಿಕೆ ದೊಡ್ಡದು. ನಿನ್ನ ಕೋರಿಕೆಯನ್ನು ನಾನು ಈಡೇರಿಸುತ್ತೇನೆ’’ ಎಂದನು. ಆ ಕ್ಷಣದಲ್ಲೇ ಆಕೆಯ ಮಗಳು ಗುಣವಾದಳು.

### ಯೇಸುವಿನಿಂದ ಅನೇಕರಿಗೆ ಸ್ವಸ್ಥತೆ

29ಆಗ ಯೇಸು ಆ ಸ್ಥಳವನ್ನು ಬಿಟ್ಟು ಗಲಿಲಾಯ ಸರೋವರದ ದಡಕ್ಕೆ ಹೋಗಿ ಒಂದು ಬೆಟ್ಟದ ಮೇಲೆ ಕುಳಿತುಕೊಂಡನು.

30ಜನರು ಗುಂಪುಗುಂಪಾಗಿ ಯೇಸುವಿನ ಬಳಿಗೆ ಬಂದರು. ಅವರು ಅನೇಕ ಬಗೆಯ ಕಾಯಿಲೆಯವರನ್ನು ಕರೆದುತಂದು, ಯೇಸುವಿನ ಪಾದಸನ್ನಿಧಿಯಲ್ಲಿ ಬಿಟ್ಟರು. ಅಲ್ಲಿ ಅಂಗವಿಕಲರು, ಕುರುಡರು, ಕುಂಟರು, ಕಿವುಡರು ಮತ್ತು ಇತರ ಅನೇಕ ಜನ ರಿದ್ದರು. ಆತನು ಇವರನ್ನೆಲ್ಲರನ್ನು ಗುಣಪಡಿಸಿದನು. 31ಮೂಕರು ಮತ್ತೆ ಮಾತಾಡುವುದನ್ನೂ ಕುಂಟರು ನಡೆದಾಡು ವುದನ್ನೂ ಅಂಗವಿಕಲರು ಸ್ವಸ್ಥರಾದದ್ದನ್ನೂ ಕುರುಡರಿಗೆ ಮತ್ತೆ ದೃಷ್ಟಿ ಬಂದದ್ದನ್ನೂ ಕಂಡು ಜನರೆಲ್ಲರೂ ಅತ್ಯಾಶ್ಚರ್ಯಪಟ್ಟು ಇಸ್ರೇಲರ ದೇವರನ್ನು ಕೊಂಡಾಡಿದರು.

### ನಾಲ್ಕು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮಾರ್ಕ 8:1-10)

32 ಯೇಸು ತನ್ನ ಶಿಷ್ಯರನ್ನು ಕರೆದು, ‘‘ನಾನು ಈ ಜನರಿಗಾಗಿ ದುಃಖಪಡುತ್ತೇನೆ. ಇವರು ಮೂರು ದಿನಗಳಿಂದ ನನ್ನ ಜೊತೆಯಲ್ಲಿದ್ದಾರೆ. ಈಗ ಇವರಿಗೆ ಊಟಕ್ಕೆ ಏನೂ ಇಲ್ಲ. ಇವರನ್ನು ಹಸಿವಿನಿಂದ ಕಳುಹಿಸಿಬಿಡುವುದಕ್ಕೆ ನನಗೆ ಮನಸ್ಸಿಲ್ಲ. ಇವರು ಮನೆಗೆ ಹೋಗುತ್ತಿರುವಾಗ ಬಳಲಿಹೋಗಬಹುದು’’ ಎಂದು ಹೇಳಿದನು.

33ಶಿಷ್ಯರು ಯೇಸುವಿಗೆ, ‘‘ಈ ಜನರೆಲ್ಲರಿಗೂ ಊಟಕ್ಕೆ ಬೇಕಾಗುವಷ್ಟು ರೊಟ್ಟಿ ನಮಗೆ ಎಲ್ಲಿ ಸಿಕ್ಕುತ್ತದೆ? ಇಲ್ಲಿಗೆ ಯಾವ ಊರೂ ಸಮೀಪವಾಗಿಲ್ಲ’’ ಎಂದು ಹೇಳಿದರು. 34ಆತನು, ‘‘ನಿಮ್ಮಲ್ಲಿ ಎಷ್ಟು ರೊಟ್ಟಿಗಳಿವೆ?’’ ಎಂದು ಕೇಳಿದನು.

ಶಿಷ್ಯರು, ‘‘ನಮ್ಮಲ್ಲಿ ಏಳು ರೊಟ್ಟಿಗಳಿವೆ ಮತ್ತು ಕೆಲವು ಸಣ್ಣ ಮೀನುಗಳಿವೆ’’ ಎಂದರು.

35ಆಗ ಜನರಿಗೆ ನೆಲದ ಮೇಲೆ ಕುಳಿತುಕೊಳ್ಳುವುದಕ್ಕೆ ಆತನು ಆಜ್ಞಾಪಿಸಿ, 36ಆ ಏಳು ರೊಟ್ಟಿಗಳನ್ನು ಮತ್ತು ಮೀನುಗಳನ್ನು ತೆಗೆದುಕೊಂಡು ಅವುಗಳಿಗಾಗಿ ದೇವರಿಗೆ ಸ್ತೋತ್ರ ಸಲ್ಲಿಸಿದನು. ಬಳಿಕ ಅವುಗಳನ್ನು ಮುರಿದು ಶಿಷ್ಯರಿಗೆ ಕೊಟ್ಟನು. ಶಿಷ್ಯರು ಅವುಗಳನ್ನು ಜನರಿಗೆ ಹಂಚಿದರು. 37ಜನರೆಲ್ಲರೂ ತಿಂದು ತೃಪ್ತರಾದರು. ಬಳಿಕ ತಿನ್ನಲಾರದೆ ಉಳಿದುಹೋದ ಆಹಾರದ ಚೂರುಗಳನ್ನು ಶಿಷ್ಯರು ಶೇಖರಿಸಿದಾಗ ಏಳು ಬುಟ್ಟಿಗಳು ತುಂಬಿ ಹೋದವು. 38ಅಂದು ಊಟ ಮಾಡಿದ್ದವರಲ್ಲಿ ಗಂಡಸರೇ ಸುಮಾರು ನಾಲ್ಕುಸಾವಿರ ಮಂದಿಯಿದ್ದರು. ಇವರಲ್ಲದೆ ಹೆಂಗಸರು ಮತ್ತು ಮಕ್ಕಳು ಸಹ ಊಟಮಾಡಿದರು. 39ಬಳಿಕ ಯೇಸು ತಮ್ಮತಮ್ಮ ಮನೆಗಳಿಗೆ ಹೋಗುವಂತೆ ಅವರಿಗೆ ಹೇಳಿ ಕಳುಹಿಸಿದನು. ಅನಂತರ ದೋಣಿಯನ್ನು ಹತ್ತಿ ಮಗದಾನ್ ಎಂಬ ಪ್ರಾಂತ್ಯಕ್ಕೆ ಹೋದನು.

### ಯೇಸುವನ್ನು ಪರೀಕ್ಷಿಸಲು ಯೆಹೂದ್ಯ ನಾಯಕರ ಪ್ರಯತ್ನ

(ಮಾರ್ಕ 8:11-13 ಲೂಕ 12:54-56)

16 ಫರಿಸಾಯರು ಮತ್ತು ಸದ್ದುಕಾಯರು ಯೇಸುವಿನ ಬಳಿಗೆ ಬಂದರು. ಅವರು ಯೇಸುವನ್ನು ಪರೀಕ್ಷಿಸಲು, ‘‘ನೀನು ದೇವರಿಂದ ಬಂದವನೆಂಬುದನ್ನು ನಿರೂಪಿಸಲು ಒಂದು ಅದ್ಭುತಕಾರ್ಯವನ್ನು ಮಾಡಿ ತೋರಿಸು’’ ಎಂದು ಕೇಳಿದರು.

2ಯೇಸು, ‘‘ಸೂರ್ಯನು ಮುಳುಗುವಾಗ ಹವಾಮಾನ ಹೇಗಿರುತ್ತದೆ ಎಂಬುದು ನಿಮಗೆ ತಿಳಿದಿದೆ. ಆಕಾಶವು ಕೆಂಪಾಗಿದ್ದರೆ, ನಮಗೆ ಒಳ್ಳೆಯ ಹವಾಮಾನವಿರುತ್ತದೆ ಎಂದು ಹೇಳುತ್ತೀರಿ. 3ಬೆಳಿಗ್ಗೆ ಸೂರ್ಯೋದಯವನ್ನು ಗಮನಿಸುತ್ತೀರಿ. ಆಕಾಶವು ಕಪ್ಪಾಗಿದ್ದರೆ ಅಥವಾ ಕೆಂಪಾಗಿದ್ದರೆ, ಈ ದಿನ ಮಳೆ ಬರುತ್ತದೆ ಎಂದು ಹೇಳುತ್ತೀರಿ. ಇವುಗಳು ಹವಾಮಾನದ ಗುರುತುಗಳಾಗಿವೆ. ನೀವು ಈ ಗುರುತುಗಳನ್ನು ಕಂಡು ಅವುಗಳ ಅರ್ಥವನ್ನು ತಿಳಿದುಕೊಳ್ಳುತ್ತೀರಿ. ಅದೇ ರೀತಿಯಲ್ಲಿ ಈಗ ನೀವು ನೋಡುತ್ತಿರುವ ಇಂದಿನ ಸಂಗತಿಗಳು ಸಹ ಗುರುತುಗಳಾಗಿವೆ. ಆದರೆ ನಿಮಗೆ ಈ ಗುರುತುಗಳ ಅರ್ಥವು ಗೊತ್ತಿಲ್ಲ. 4ಕೆಟ್ಟವ ರಾದ ಮತ್ತು ಪಾಪಿಗಳಾದ ಜನರು ಸೂಚನೆಗಾಗಿ ಒಂದು ಅದ್ಭುತಕಾರ್ಯವನ್ನು ಅಪೇಕ್ಷಿಸುತ್ತಾರೆ. ಅವರಿಗೆ ಯೋನ ನಲ್ಲಾದ ಸೂಚಕಕಾರ್ಯವೊಂದೇ* ಹೊರತು ಬೇರೆ ಯಾವ ಸೂಚಕಕಾರ್ಯವೂ ದೊರೆಯುವುದಿಲ್ಲ’’ ಎಂದು ಉತ್ತರ ಕೊಟ್ಟನು. ಬಳಿಕ ಯೇಸು ಆ ಸ್ಥಳವನ್ನು ಬಿಟ್ಟು ಹೊರಟು ಹೋದನು.

### ಯೆಹೂದ್ಯನಾಯಕರ ಬಗ್ಗೆ ಯೇಸು ನೀಡಿದ ಎಚ್ಚರಿಕೆ

(ಮಾರ್ಕ 8:14-21)

5ಯೇಸು ಮತ್ತು ಆತನ ಶಿಷ್ಯರು ಸರೋವರವನ್ನು* ದಾಟಿ ಹೋದರು. ಆದರೆ ಶಿಷ್ಯರು ರೊಟ್ಟಿಯನ್ನು ತರಲು ಮರೆತುಬಿಟ್ಟರು. 6ಯೇಸು ಶಿಷ್ಯರಿಗೆ, ‘‘ಎಚ್ಚರಿಕೆಯಿಂದಿರಿ! ಫರಿಸಾಯರ ಮತ್ತು ಸದ್ದುಕಾಯರ ಹುಳಿಗೆ ಒಳಗಾಗಬೇಡಿ’’ ಎಂದು ಹೇಳಿದನು.

7ಶಿಷ್ಯರು ಇದರ ಅರ್ಥವನ್ನು ಚರ್ಚಿಸಿದರು. ಅವರು, ‘‘ನಾವು ರೊಟ್ಟಿ ತರಲು ಮರೆತುಬಿಟ್ಟದ್ದಕ್ಕಾಗಿ ಯೇಸು ಹೀಗೆ ಹೇಳಿರ ಬಹುದೆ?’’ ಎಂದು ಮಾತಾಡಿಕೊಂಡರು.

8ಶಿಷ್ಯರು ಈ ವಿಷಯವನ್ನು ಚರ್ಚಿಸುತ್ತಿರುವುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಯೇಸು ಅವರಿಗೆ, ‘‘ರೊಟ್ಟಿ ಇಲ್ಲವಲ್ಲಾ ಎಂಬ ವಿಷಯದಲ್ಲಿ ನೀವು ಮಾತಾಡಿಕೊಳ್ಳುತ್ತಿರುವುದೇಕೆ? ಅಲ್ಪವಿಶ್ವಾಸಿಗಳೇ, 9ನೀವಿನ್ನೂ ಅರ್ಥಮಾಡಿಕೊಳ್ಳಲಿಲ್ಲವೇ? ಐದು ರೊಟ್ಟಿಗಳಿಂದ ಐದು ಸಾವಿರ ಜನರಿಗೆ ಊಟ ಮಾಡಿಸಿದ್ದು ನಿಮಗೆ ನೆನಪಿಲ್ಲವೇ? ಜನರು ಊಟ ಮಾಡಿದ ಮೇಲೆ ನೀವು ಅನೇಕ ಬುಟ್ಟಿಗಳಲ್ಲಿ ರೊಟ್ಟಿಗಳನ್ನು ತುಂಬಿಸಿದ್ದು ನಿಮಗೆ ನೆನಪಿಲ್ಲವೇ? 10ಏಳು ರೊಟ್ಟಿಗಳ ತುಂಡುಗಳನ್ನು ನಾಲ್ಕು ಸಾವಿರ ಜನರಿಗೆ ಊಟಮಾಡಿಸಿದ್ದು ನಿಮಗೆ ನೆನಪಿಲ್ಲವೇ?

---

**ಯೋನನಲ್ಲಾದ ಸೂಚಕಕಾರ್ಯ** ಯೋನನು ಮೂರು ದಿನಗಳ ಕಾಲ ಒಂದು ದೊಡ್ಡ ಮೀನಿನಲ್ಲಿದ್ದುದು ಯೇಸು ಮೂರು ದಿನ ಸಮಾಧಿ ಯಲ್ಲಿದ್ದಂತೆ.

**ಸರೋವರ** ಗಲಿಲೀಯ ಸರೋವರ.

ಜನರು ತಿಂದು ಮುಗಿಸಿದ ಮೇಲೆ ನೀವು ಅನೇಕ ಬುಟ್ಟಿಗಳಲ್ಲಿ
ರೊಟ್ಟಿಗಳನ್ನು ತುಂಬಿಸಿದ್ದು ನಿಮಗೆ ನೆನಪಿಲ್ಲವೇ? 11ಆದ್ದರಿಂದ
ನಾನು ನಿಮಗೆ ಹೇಳಿದ್ದು ರೊಟ್ಟಿಯ ಕುರಿತಲ್ಲ. ನೀವು ಇದನ್ನು
ಅರ್ಥಮಾಡಿಕೊಳ್ಳುವುದಿಲ್ಲವೇಕೆ? ಫರಿಸಾಯರ ಮತ್ತು
ಸದ್ದುಕಾಯರ ಹುಳಿಗೆ (ಕೆಟ್ಟ ಪ್ರಭಾವಕ್ಕೆ) ಒಳಗಾಗದಂತೆ ನೀವು
ಎಚ್ಚರಿಕೆಯಿಂದಿರಬೇಕೆಂದು ನಾನು ನಿಮ್ಮನ್ನು ಎಚ್ಚರಿಸಿದೆನು''
ಅಂದನು. 12ಆಗ ಶಿಷ್ಯರು ಯೇಸು ಹೇಳಿದ್ದನ್ನು ಅರ್ಥಮಾಡಿ
ಕೊಂಡರು. ಆತನು ಅವರಿಗೆ ರೊಟ್ಟಿಯಲ್ಲಿ ಬೆರೆಸಿದ್ದ ಹುಳಿ
ಯನ್ನು ಕುರಿತು ಎಚ್ಚರಿಕೆಯಾಗಿರಬೇಕೆಂದು ಹೇಳಲಿಲ್ಲ.
ಫರಿಸಾಯರ ಮತ್ತು ಸದ್ದುಕಾಯರ ಬೋಧನೆಯ ಪ್ರಭಾವಕ್ಕೆ
ಒಳಗಾಗದಂತೆ ಎಚ್ಚರಿಕೆಯಾಗಿರಬೇಕೆಂದು ಹೇಳಿದ್ದನು.

### ಯೇಸುವೇ ಕ್ರಿಸ್ತನೆಂದು ಪೇತ್ರನ ಪ್ರಕಟನೆ

(ಮಾರ್ಕ 8:27-30; ಲೂಕ 9:18-21)

13ಯೇಸು ಫಿಲಿಪ್ಪನ ಸೆಜರೇಯ ಎಂಬ ಪ್ರಾಂತ್ಯಕ್ಕೆ
ಹೋದನು. ಯೇಸು ತನ್ನ ಶಿಷ್ಯರಿಗೆ, ''ಮನುಷ್ಯಕುಮಾರನಾದ
ನನ್ನನ್ನು ಜನರು ಯಾರೆಂದು ಹೇಳುತ್ತಾರೆ?'' ಎಂದು
ಕೇಳಿದನು.
14ಶಿಷ್ಯರು, ''ಕೆಲವರು 'ಸ್ನಾನಿಕ ಯೋಹಾನ' ನೆಂದು
ಹೇಳುತ್ತಾರೆ. ಇನ್ನು ಕೆಲವರು 'ಎಲೀಯ' ನೆಂದು ಹೇಳುತ್ತಾರೆ.
ಮತ್ತೆ ಕೆಲವರು 'ಯೆರೆಮೀಯ' ನೆಂದು ಇಲ್ಲವೆ 'ಪ್ರವಾದಿಗಳಲ್ಲಿ
ಒಬ್ಬನೆಂದು ಹೇಳುತ್ತಾರೆ.''' ಎಂದು ಉತ್ತರ ಕೊಟ್ಟರು.
15ಅದಕ್ಕೆ ಆತನು, ''ನೀವು ನನ್ನನ್ನು ಯಾರೆಂದು ಹೇಳು
ತ್ತೀರಿ?'' ಎಂದು ಕೇಳಿದನು.
16ಸೀಮೋನ್ ಪೇತ್ರನು, ''ನೀನೇ ಬರಬೇಕಾಗಿರುವ
ಕ್ರಿಸ್ತನು. ನೀನೇ ಜೀವಸ್ವರೂಪನಾದ ದೇವರ ಮಗನು'' ಎಂದು
ಉತ್ತರಕೊಟ್ಟನು.
17ಯೇಸು, ''ಯೋನನ ಮಗನಾದ ಸೀಮೋನನೇ ನೀನು
ಧನ್ಯನು. ಅದನ್ನು ನಿನಗೆ ತಿಳಿಸಿಕೊಟ್ಟವನು ಯಾವ ಮನುಷ್ಯನೂ
ಅಲ್ಲ. ಪರಲೋಕದಲ್ಲಿರುವ ನನ್ನ ತಂದೆಯೇ ನಿನಗೆ ತಿಳಿಸಿ
ಕೊಟ್ಟನು. 18ಆದ್ದರಿಂದ ನಾನು ನಿನಗೆ ಹೇಳುವುದೇನೆಂದರೆ,
ನೀನೇ ಪೇತ್ರ.* ನಾನು ಈ ಬಂಡೆಯ ಮೇಲೆ ನನ್ನ ಸಭೆಯನ್ನು
ಕಟ್ಟುತ್ತೇನೆ. ಪಾತಾಳಲೋಕದ ಬಲವು ನನ್ನ ಸಭೆಯನ್ನು
ಸೋಲಿಸಲಾರದು. 19ಪರಲೋಕರಾಜ್ಯದ ಬೀಗದ ಕೈಗಳನ್ನು
ನಾನು ನಿನಗೆ ಕೊಡುತ್ತೇನೆ. ನೀನು ಭೂಲೋಕದಲ್ಲಿ ನೀಡುವ
ನ್ಯಾಯತೀರ್ಪು ದೇವರ ನ್ಯಾಯತೀರ್ಪಾಗಿರುತ್ತದೆ. ನೀನು
ಭೂಲೋಕದಲ್ಲಿ ನೀಡುವ ಕ್ಷಮೆಯು ದೇವರ ಕ್ಷಮೆಯಾಗಿರು
ತ್ತದೆ'' ಎಂದು ಉತ್ತರಿಸಿದನು. 20ಬಳಿಕ ಯೇಸು ತನ್ನ ಶಿಷ್ಯರಿಗೆ,
ತಾನು ಕ್ರಿಸ್ತನೆಂಬುದನ್ನು ಯಾರಿಗೂ ಹೇಳಕೂಡದೆಂದು
ಎಚ್ಚರಿಕೆ ಕೊಟ್ಟನು.

### ತನ್ನ ಮರಣದ ಕುರಿತು ಯೇಸುವಿನ ಮೊದಲನೆ ಪ್ರಕಟನೆ

(ಮಾರ್ಕ 8:31-9:1; ಲೂಕ 9:22-27)

21ಆ ಸಮಯದಲ್ಲಿ ಯೇಸು ತಾನು ಜೆರುಸಲೇಮಿಗೆ
ಹೋಗಬೇಕೆಂದು ಮತ್ತು ಅಲ್ಲಿ ಯೆಹೂದ್ಯರ ಹಿರಿಯ ನಾಯಕ
ರಿಂದಲೂ ಮಹಾಯಾಜಕರಿಂದಲೂ ಮತ್ತು ಧರ್ಮೋಪ
ದೇಶಕರಿಂದಲೂ ತಾನು ಅನೇಕ ಕಷ್ಟಗಳನ್ನು ಅನುಭವಿಸಿ
ಕೊಲ್ಲಲ್ಪಟ್ಟು ಮೂರನೆಯ ದಿನದಲ್ಲಿ ಸತ್ತವರೊಳಗಿಂದ
ಜೀವಂತವಾಗಿ ಎದ್ದು ಬರಬೇಕಾಗಿದೆ ಎಂದು ತನ್ನ ಶಿಷ್ಯರಿಗೆ
ವಿವರಿಸಿ ಹೇಳಿದನು. 22ಆಗ ಪೇತ್ರನು ಯೇಸುವನ್ನು
ಸ್ವಲ್ಪದೂರದಲ್ಲಿ ಕರೆದೊಯ್ದು, ''ದೇವರು ನಿನ್ನನ್ನು ಕಾಪಾಡಲಿ
ನಿನಗೆಂದಿಗೂ ಹಾಗೆ ಸಂಭವಿಸದಿರಲಿ!'' ಎಂದು
ಪ್ರತಿಭಟಿಸಿದನು.
23ಆಗ ಯೇಸು ಪೇತ್ರನಿಗೆ, ''ಸೈತಾನನೇ, ಇಲ್ಲಿಂದ ಹೊರಡು!
ನೀನು ನನಗೆ ಅಡ್ಡಿಯಾಗಿರುವೆ! ನಿನ್ನ ಯೋಚನೆ ಮನುಷ್ಯರ
ಯೋಚನೆಯೇ ಹೊರತು ದೇವರದಲ್ಲ'' ಎಂದು ಹೇಳಿದನು.
24ಬಳಿಕ ಯೇಸು ತನ್ನ ಶಿಷ್ಯರಿಗೆ, ''ನನ್ನನ್ನು ಹಿಂಬಾಲಿಸಲು
ಅಪೇಕ್ಷಿಸುವವನು ತನಗೆ ಇಷ್ಟವಾದದ್ದನ್ನು ತ್ಯಜಿಸಬೇಕು. ಅವನು
ತನಗೆ ಕೊಟ್ಟಿರುವ ಶಿಲುಬೆಯನ್ನು (ಸಂಕಟ) ಸ್ವೀಕರಿಸಿಕೊಂಡು
ನನ್ನನ್ನು ಹಿಂಬಾಲಿಸಬೇಕು. 25ತನ್ನ ಪ್ರಾಣವನ್ನು ಉಳಿಸಿಕೊಳ್ಳ
ಬೇಕೆಂದಿರುವವನು ಅದನ್ನು ಕಳೆದುಕೊಳ್ಳುವನು. ನನಗಾಗಿ ತನ್ನ
ಪ್ರಾಣವನ್ನು ಕೊಡುವ ಪ್ರತಿಯೊಬ್ಬನೂ ಅದನ್ನು ಉಳಿಸಿಕೊಳ್ಳು
ವನು. 26ಒಬ್ಬನು ಪ್ರಪಂಚವನ್ನೆಲ್ಲಾ ಗಳಿಸಿಕೊಂಡು ತನ್ನ
ಆತ್ಮವನ್ನೇ ಕಳೆದುಕೊಂಡರೆ ಅದರಿಂದ ಅವನಿಗೇನು
ಪ್ರಯೋಜನ? ಮನುಷ್ಯನು ತನ್ನ ಆತ್ಮವನ್ನು ಕೊಂಡುಕೊಳ್ಳಲು
ಏನನ್ನು ತಾನೇ ಕೊಡಬಲ್ಲನು? 27ಮನುಷ್ಯಕುಮಾರನು ತನ್ನ
ತಂದೆಯ ಮಹಿಮೆಯೊಡನೆ ಮತ್ತು ತನ್ನ ದೂತರೊಡನೆ ಮರಳಿ
ಬಂದು ಪ್ರತಿಯೊಬ್ಬನಿಗೂ ಅವನವನ ಕಾರ್ಯಗಳಿಗೆ ತಕ್ಕಂತೆ
ಪ್ರತಿಫಲ ಕೊಡುವನು. 28ನಾನು ನಿಮಗೆ ಸತ್ಯವನ್ನೇ
ಹೇಳುತ್ತೇನೆ. ಈಗ ಇಲ್ಲಿ ನಿಂತಿರುವ ಕೆಲವರು, ಮನುಷ್ಯ
ಕುಮಾರನು ತನ್ನ ರಾಜ್ಯದೊಡನೆ ಬರುವುದನ್ನು ನೋಡುವ
ತನಕ ಸಾಯುವುದಿಲ್ಲ'' ಎಂದು ಹೇಳಿದನು.

### ಯೇಸುವಿನ ರೂಪಾಂತರ

(ಮಾರ್ಕ 9:2-13; ಲೂಕ 9:28-36)

17 ಆರು ದಿನಗಳ ತರುವಾಯ, ಪೇತ್ರನನ್ನು, ಯಾಕೋಬ
ನನ್ನು ಮತ್ತು ಯಾಕೋಬನ ಸಹೋದರನಾದ
ಯೋಹಾನನನ್ನು ಕರೆದುಕೊಂಡು ಯೇಸು ಎತ್ತರವಾದ ಒಂದು
ಬೆಟ್ಟಕ್ಕೆ ಹೋದನು. ಅವರಲ್ಲದೆ ಬೇರೆ ಯಾರೂ ಅಲ್ಲಿರಲಿಲ್ಲ.
2ಈ ಶಿಷ್ಯರ ಕಣ್ಣೆದುರಿನಲ್ಲಿಯೇ ಆತನು ರೂಪಾಂತರ
ಹೊಂದಿದನು. ಆತನ ಮುಖವು ಸೂರ್ಯನಂತೆ ಪ್ರಕಾಶಮಾನ
ವಾಯಿತು. ಆತನ ಉಡುಪುಗಳು ಬೆಳಕಿನಂತೆ ಬೆಳ್ಳಗಾದವು.
3ಅಲ್ಲದೆ ಆತನೊಂದಿಗೆ ಇಬ್ಬರು ಪುರುಷರು ಮಾತಾಡುತ್ತಾ
ನಿಂತಿದ್ದರು. ಅವರೇ ಮೋಶೆ ಮತ್ತು ಎಲೀಯ.
4ಪೇತ್ರನು ಯೇಸುವಿಗೆ, ''ಪ್ರಭುವೇ, ನಾವು ಇಲ್ಲೇ
ಇರುವುದು ಒಳ್ಳೆಯದು. ನೀನು ಇಷ್ಟಪಟ್ಟರೆ ಇಲ್ಲಿ ಮೂರು
ಡೇರೆಗಳನ್ನು ಹಾಕುವೆವು. ನಿನಗೊಂದು, ಮೋಶೆಗೊಂದು
ಮತ್ತು ಎಲೀಯನಿಗೊಂದು'' ಎಂದನು.
5ಪೇತ್ರನು ಮಾತಾಡುತ್ತಿರುವಾಗಲೇ ಪ್ರಕಾಶಮಾನವಾದ
ಒಂದು ಮೋಡವು ಅವರ ಮೇಲೆ ಕವಿಯಿತು ಮತ್ತು ಆ
ಮೋಡದೊಳಗಿಂದ ಒಂದು ಧ್ವನಿಯು, ''ಈತನು ನನ್ನ ಪ್ರಿಯ
ಮಗನು. ನಾನು ಈತನನ್ನು ಬಹಳ ಮೆಚ್ಚಿಕೊಂಡಿದ್ದೇನೆ.
ಈತನಿಗೆ ವಿಧೇಯರಾಗಿರಿ!'' ಎಂದು ಹೇಳಿತು.

---

**ಪೇತ್ರ** ಅಂದರೆ ''ಬಂಡೆ.'' ಇದು ಪದ ಬಳಕೆಯ ''ಶ್ಲೇಷ್ಟೆಯಾಗಿದೆ.''

6ಯೇಸುವಿನ ಸಂಗಡವಿದ್ದ ಶಿಷ್ಯರಿಗೂ ಈ ಧ್ವನಿ ಕೇಳಿಸಿತು.
ಅವರು ಬಹಳ ಭಯದಿಂದ ಬೋರಲಬಿದ್ದರು. 7ಆಗ ಆತನು
ಶಿಷ್ಯರ ಬಳಿಗೆ ಬಂದು ಅವರನ್ನು ಮುಟ್ಟಿ, ‘‘ಏಳಿ, ಹೆದರಬೇಡಿ’’
ಎಂದನು. 8ಅವರು ಕಣ್ಣೆತ್ತಿ ನೋಡಿದಾಗ ಯೇಸುವೊಬ್ಬನೇ
ಅಲ್ಲಿದ್ದನು.

9ಬೆಟ್ಟದಿಂದ ಇಳಿದು ಬರುತ್ತಿರುವಾಗ ಯೇಸು ತನ್ನ ಶಿಷ್ಯರಿಗೆ,
‘‘ನೀವು ಬೆಟ್ಟದ ಮೇಲೆ ಕಂಡ ದರ್ಶನವನ್ನು ಈಗ ಯಾರಿಗೂ
ಹೇಳದೆ ಮನುಷ್ಯಕುಮಾರನು ಸತ್ತು ಜೀವಂತವಾಗಿ ಎದ್ದುಬಂದ
ಮೇಲೆ ತಿಳಿಸಿರಿ’’ ಎಂದು ಆಜ್ಞಾಪಿಸಿದನು.

10ಶಿಷ್ಯರು ಯೇಸುವಿಗೆ, ‘‘ಕ್ರಿಸ್ತನು ಬರುವುದಕ್ಕಿಂತ ಮುಂಚೆ
ಎಲೀಯನು ಬರಬೇಕಾಗಿದೆ ಎಂದು ಧರ್ಮೋಪದೇಶಕರು
ಹೇಳುವುದೇಕೆ?’’ ಎಂದು ಕೇಳಿದರು.

11ಅದಕ್ಕೆ ಯೇಸು, ‘‘ಎಲೀಯನು ಬರುತ್ತಾನೆಂದು ಅವರು
ಹೇಳುವುದು ಸರಿ. ನಿಜವಾಗಿಯೂ ಎಲೀಯನು ಬಂದು ಎಲ್ಲಾ
ವಿಷಯಗಳನ್ನು ಸರಿಪಡಿಸುವನು. 12ಆದರೆ ನಾನು ನಿಮಗೆ
ಹೇಳುವುದೇನೆಂದರೆ, ಎಲೀಯನು ಈಗಾಗಲೇ ಬಂದಿದ್ದಾನೆ.
ಆದರೆ ಆತನು ಯಾರೆಂಬುದು ಜನರಿಗೆ ತಿಳಿಯಲಿಲ್ಲ. ಜನರು
ತಮಗಿಷ್ಟಬಂದಂತೆ ಅವನನ್ನು ಹಿಂಸಿಸಿದರು. ಅದೇ ರೀತಿ ಅವರು
ಮನುಷ್ಯಕುಮಾರನನ್ನು ಹಿಂಸೆಪಡಿಸುವರು.’’ ಎಂದು ಉತ್ತರ
ಕೊಟ್ಟನು. 13ಯೇಸು ಹೇಳುತ್ತಿರುವುದು ಸ್ನಾನಿಕನಾದ
ಯೋಹಾನನನ್ನೇ ಕುರಿತು ಎಂದು ಶಿಷ್ಯರು ಗ್ರಹಿಸಿಕೊಂಡರು.

### ಯೇಸುವಿನಿಂದ ಕಾಯಿಲೆಯ ಬಾಲಕನಿಗೆ ಸ್ವಸ್ಥತೆ

(ಮಾರ್ಕ 9:14-29; ಲೂಕ 9:37-43)

14ಯೇಸು ಮತ್ತು ಆತನ ಶಿಷ್ಯರು ಜನರ ಬಳಿಗೆ ಹಿಂತಿರುಗಿ
ಹೋದರು. ಒಬ್ಬನು ಯೇಸುವಿನ ಬಳಿಗೆ ಬಂದು ಆತನ ಮುಂದೆ
ಅಡ್ಡಬಿದ್ದು, 15‘‘ಪ್ರಭುವೇ, ನನ್ನ ಮಗನಿಗೆ ದಯೆತೋರು.
ಅವನು ಮೂರ್ಛಾರೋಗದಿಂದ ಬಹಳ ಬಾಧೆಪಡುತ್ತಿದ್ದಾನೆ.
ಅವನು ಆಗ್ಗಾಗ್ಗೆ ಬೆಂಕಿಯಲ್ಲಿ ಇಲ್ಲವೇ ನೀರಿನಲ್ಲಿ ಬೀಳುತ್ತಾನೆ.
16ನಾನು ನನ್ನ ಮಗನನ್ನು ನಿನ್ನ ಶಿಷ್ಯರ ಬಳಿಗೆ ತಂದೆನು. ಆದರೆ
ಅವನನ್ನು ಗುಣಪಡಿಸಲು ಅವರಿಗೆ ಸಾಧ್ಯವಾಗಲಿಲ್ಲ’’ ಎಂದನು.

17ಯೇಸು, ‘‘ಅಯ್ಯೋ, ವಿಶ್ವಾಸವಿಲ್ಲದ ವಕ್ರಸಂತತಿಯೇ,
ಇನ್ನೆಷ್ಟು ಕಾಲ ನಾನು ನಿಮ್ಮೊಂದಿಗಿರಬೇಕು? ಇನ್ನೆಷ್ಟುಕಾಲ
ನಾನು ನಿಮ್ಮನ್ನು ಸಹಿಸಿಕೊಳ್ಳಲಿ? ಆ ಬಾಲಕನನ್ನು ಇಲ್ಲಿಗೆ
ಕರೆತನ್ನಿ’’ ಎಂದು ಉತ್ತರ ಕೊಟ್ಟನು. 18ಯೇಸು ಬಾಲಕನಲ್ಲಿದ್ದ
ದೆವ್ವಕ್ಕೆ ಬಲವಾಗಿ ಗದರಿಸಲು ದೆವ್ವವು ಅವನನ್ನು ಬಿಟ್ಟು
ಹೋಯಿತು. ಅವನಿಗೆ ಆ ಕ್ಷಣದಲ್ಲೇ ಗುಣವಾಯಿತು.

19ಆಗ ಶಿಷ್ಯರು ಪ್ರತ್ಯೇಕವಾಗಿ ಯೇಸುವಿನ ಬಳಿಗೆ ಬಂದು,
‘‘ಅವನನ್ನು ದೆವ್ವದಿಂದ ಬಿಡಿಸಲು ನಾವು ಪ್ರಯತ್ನಿಸಿದರೂ ನಮ
ಗೇಕೆ ಸಾಧ್ಯವಾಗಲಿಲ್ಲ?’’ ಎಂದರು. 20ಅದಕ್ಕೆ ಯೇಸು, ‘‘ನಿಮ್ಮ
ಅಲ್ಪವಿಶ್ವಾಸವೇ ಅದಕ್ಕೆ ಕಾರಣ. ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ನಿಮ್ಮ ನಂಬಿಕೆಯು ಸಾಸಿವೆಕಾಳಿನಷ್ಟಿದ್ದರೂ, ಈ
ಪರ್ವತಕ್ಕೆ ‘ಇಲ್ಲಿಂದ ಅಲ್ಲಿಗೆ ಹೋಗು’ ಎಂದು ನೀವು ಹೇಳಿ
ದರೂ ಅದು ಹೋಗುತ್ತದೆ. ನಿಮಗೆ ಅಸಾಧ್ಯವಾಗದ ಕಾರ್ಯ
ಗಳೇ ಇರದು’’ ಎಂದನು. 21 *

### ತನ್ನ ಮರಣವನ್ನು ಕುರಿತು ಯೇಸುವಿನ ಎರಡನೆ ಪ್ರಕಟನೆ

(ಮಾರ್ಕ 9:30-32; ಲೂಕ 9:43-45)

22ಒಮ್ಮೆ ಶಿಷ್ಯರು ಗಲಿಲಾಯದಲ್ಲಿ ಒಟ್ಟಿಗೆ ಸೇರಿದ್ದರು.
ಯೇಸು ತನ್ನ ಶಿಷ್ಯರಿಗೆ, ‘‘ಮನುಷ್ಯಕುಮಾರನನ್ನು ಜನರ ವಶಕ್ಕೆ
ಒಪ್ಪಿಸಲಾಗುವುದು. 23ಅವರು ಅವನನ್ನು ಕೊಲ್ಲುವರು. ಆದರೆ
ಮೂರನೆಯ ದಿನದಲ್ಲಿ ಆತನು ಮರಣದಿಂದ ಮೇಲೆದ್ದು
ಬರುವನು’’ ಎಂದು ಹೇಳಿದನು.

### ತೆರಿಗೆಯ ಕುರಿತು ಯೇಸುವಿನ ಉಪದೇಶ

24ಯೇಸು ಮತ್ತು ಆತನ ಶಿಷ್ಯರು ಕಪೆರ್ನೌಮಿಗೆ ಹೋದರು.
ದೇವಾಲಯಕ್ಕೆ ಯೆಹೂದ್ಯರಿಂದ ವಾರ್ಷಿಕ ತೆರಿಗೆ ವಸೂಲಿ
ಮಾಡುವ ಕೆಲವರು ಪೇತ್ರನ ಬಳಿಗೆ ಬಂದು, ‘‘ನಿಮ್ಮ
ಬೋಧಕನು ದೇವಾಲಯದ ವಾರ್ಷಿಕ ತೆರಿಗೆಯನ್ನು ಸಲ್ಲಿಸುವು
ದಿಲ್ಲವೋ?’’ ಎಂದು ಕೇಳಿದರು.

25ಅದಕ್ಕೆ ಪೇತ್ರನು, ‘‘ಹೌದು, ಸಲ್ಲಿಸುತ್ತಾನೆ’’ ಎಂದು ಉತ್ತರ
ಕೊಟ್ಟನು. ಬಳಿಕ ಪೇತ್ರನು ಯೇಸುವಿದ್ದ ಮನೆಯೊಳಕ್ಕೆ
ಹೋದನು. ಅವನು ಈ ವಿಷಯವನ್ನು ಹೇಳುವುದಕ್ಕಿಂತ
ಮೊದಲೇ ಯೇಸು ಅವನಿಗೆ, ‘‘ಭೂಲೋಕದ ರಾಜರುಗಳು
ಜನರಿಂದ ಅನೇಕ ಬಗೆಯ ತೆರಿಗೆಗಳನ್ನು ತೆಗೆದುಕೊಳ್ಳುತ್ತಾರೆ.
ಆದರೆ ತೆರಿಗೆ ಕೊಡುವ ಜನರು ಯಾರು? ರಾಜನ ಮಕ್ಕಳೇ
ಅಥವಾ ಬೇರೆ ಜನರೇ? ನಿನ್ನ ಅಭಿಪ್ರಾಯವೇನು?’’ ಎಂದು
ಕೇಳಿದನು. 26ಪೇತ್ರನು, ‘‘ಬೇರೆ ಜನರು ತೆರಿಗೆಗಳನ್ನು ಸಲ್ಲಿಸು
ತ್ತಾರೆ.’’ ಎಂದು ಉತ್ತರ ಕೊಟ್ಟನು.

ಯೇಸು ಪೇತ್ರನಿಗೆ, ‘‘ಹಾಗಾದರೆ ರಾಜನ ಮಕ್ಕಳು ತೆರಿಗೆ
ಕೊಡಬೇಕಿಲ್ಲ. 27ಆದರೆ ತೆರಿಗೆ ವಸೂಲಿಗಾರರನ್ನು ನಾವೇಕೆ
ಕೋಪಗೊಳಿಸಬೇಕು? ನೀನು ತೆರಿಗೆಯನ್ನು ಕೊಡು. ಸರೋ
ವರಕ್ಕೆ ಹೋಗಿ ಮೀನನ್ನು ಹಿಡಿ. ನಿನಗೆ ಸಿಕ್ಕಿದ ಮೊದಲನೇ
ಮೀನಿನ ಬಾಯನ್ನು ತೆರೆ, ಅದರ ಬಾಯೊಳಗೆ ವಾರ್ಷಿಕ ತೆರಿಗೆಗೆ
ಬೇಕಾದ ಒಂದು ನಾಣ್ಯವನ್ನು ಕಾಣುವೆ. ಅದನ್ನು ತೆಗೆದು
ಕೊಂಡು ಬಂದು, ತೆರಿಗೆ ವಸೂಲಿ ಮಾಡುವವರಿಗೆ ಕೊಡು.
ಅದರಿಂದ ನನ್ನ ಮತ್ತು ನಿನ್ನ ತೆರಿಗೆಯನ್ನು ಕೊಟ್ಟಂತಾಗು
ವುದು’’ಎಂದು ಹೇಳಿದನು.

### ಅತ್ಯುತ್ತಮ ಸ್ಥಾನ ಯಾರಿಗೆ?

(ಮಾರ್ಕ 9:33-37; ಲೂಕ 9:46-48)

18 ಆ ಸಮಯದಲ್ಲಿ ಶಿಷ್ಯರು ಯೇಸುವಿನ ಬಳಿಗೆ ಬಂದು,
‘‘ಪರಲೋಕರಾಜ್ಯದಲ್ಲಿ ಯಾರಿಗೆ ಅತ್ಯುತ್ತಮ ಸ್ಥಾನ
ದೊರೆಯುತ್ತದೆ’’ ಎಂದು ಕೇಳಿದರು.

2ಯೇಸು ಚಿಕ್ಕಮಗುವನ್ನು ತನ್ನ ಹತ್ತಿರಕ್ಕೆ ಕರೆದು ತನ್ನ ಶಿಷ್ಯರ
ಮುಂದೆ ಆ ಮಗುವನ್ನು ನಿಲ್ಲಿಸಿ ಇಂತೆಂದನು: 3‘‘ನಾನು ನಿಮಗೆ
ಸತ್ಯವಾಗಿ ಹೇಳುತ್ತೇನೆ, ನೀವು ಬದಲಾವಣೆ ಹೊಂದಿಕೊಂಡು
ನಿಮ್ಮ ಹೃದಯದಲ್ಲಿ ಚಿಕ್ಕ ಮಕ್ಕಳಂತೆ ಆಗಬೇಕು. ಇಲ್ಲವಾದರೆ,
ನೀವು ಪರಲೋಕರಾಜ್ಯಕ್ಕೆ ಸೇರುವುದೇ ಇಲ್ಲ. 4ಈ ಚಿಕ್ಕ
ಮಗುವಿನಂತೆ ತನ್ನನ್ನು ತಗ್ಗಿಸಿಕೊಳ್ಳುವವನೇ ಪರಲೋಕ
ರಾಜ್ಯದಲ್ಲಿ ಅತ್ಯುತ್ತಮ ಸ್ಥಾನ ಪಡೆಯುತ್ತಾನೆ.

5ಯಾವನಾದರೂ ನನ್ನ ಹೆಸರಿನಲ್ಲಿ ಒಂದು ಚಿಕ್ಕ ಮಗುವನ್ನು
ಸ್ವೀಕರಿಸಿಕೊಂಡರೆ ಅವನು ನನ್ನನ್ನೇ ಸ್ವೀಕರಿಸಿಕೊಂಡಂತಾ

---

**ವಚನ 21** ಕೆಲವು ಪ್ರತಿಗಳಲ್ಲಿ ಇಂತಿದೆ: ‘‘ನೀವು ಉಪವಾಸ ಪ್ರಾರ್ಥನೆ ಮಾಡಿದರಷ್ಟೇ ಅಂಥ ದೆವ್ವಗಳನ್ನು ಬಿಡಿಸಲು ಸಾಧ್ಯ.’’

ಯಿತು. 6ದೀನತೆಯಿಂದ ನನ್ನನ್ನು ಹಿಂಬಾಲಿಸುವವರಲ್ಲಿ
ಯಾರನ್ನಾದರೂ ಪಾಪಕ್ಕೆ ನಡೆಸುವವನಿಗೆ ಬಹಳ ಕೇಡಾಗು
ವುದು. ಅವನು ತನ್ನ ಕೊರಳಿಗೆ ಬೀಸುವ ಕಲ್ಲನ್ನು ಕಟ್ಟಿಕೊಂಡು,
ಆಳವಾದ ಸಮುದ್ರದಲ್ಲಿ ಮುಳುಗುವುದೇ ಉತ್ತಮ. 7ಜನರನ್ನು
ಪಾಪಕ್ಕೆ ನಡೆಸುವ ಸಂಗತಿಗಳ ನಿಮಿತ್ತ ನಾನು ಈ ಲೋಕದ
ವಿಷಯದಲ್ಲಿ ದುಃಖಪಡುತ್ತೇನೆ. ಅವು ಯಾವಾಗಲೂ
ಇರುತ್ತವೆ. ಆದರೆ ಅವುಗಳಿಗೆ ಕಾರಣನಾಗುವ ವ್ಯಕ್ತಿಗೆ ಬಹಳ
ಕೇಡಾಗುವುದು. 8ನಿನ್ನ ಕೈಯಾಗಲಿ, ನಿನ್ನ ಕಾಲಾಗಲಿ ನಿನ್ನ
ಪಾಪಕ್ಕೆ ಕಾರಣವಾದರೆ ಅದನ್ನು ಕತ್ತರಿಸಿ ಎಸೆದುಬಿಡು.
ಕೈಯನ್ನಾಗಲಿ ಕಾಲನ್ನಾಗಲಿ ಕಳೆದುಕೊಂಡು ನಿತ್ಯಜೀವ
ಹೊಂದುವುದೇ ನಿನಗೆ ಉತ್ತಮ. ಎರಡು ಕೈ ಮತ್ತು ಎರಡು
ಕಾಲುಳ್ಳವನಾಗಿದ್ದು ಶಾಶ್ವತವಾದ ಬೆಂಕಿಯ ನರಕದಲ್ಲಿ
ಹಾಕಿಸಿಕೊಳ್ಳುವುದಕ್ಕಿಂತ ಅದು ಎಷ್ಟೋ ಉತ್ತಮ. 9ನಿನ್ನ ಕಣ್ಣು
ಗಳು ನಿನ್ನನ್ನು ಪಾಪಕ್ಕೆ ನಡೆಸಿದರೆ, ಅದನ್ನು ಕಿತ್ತು ಎಸೆದುಬಿಡು.
ಎರಡು ಕಣ್ಣುಳ್ಳವನಾಗಿದ್ದು ಬೆಂಕಿಯ ನರಕದಲ್ಲಿ ಹಾಕಿಸಿಕೊಳ್ಳು
ವದಕ್ಕಿಂತ ಒಂದೇ ಕಣ್ಣುಳ್ಳವನಾಗಿದ್ದು ನಿತ್ಯಜೀವ ಹೊಂದು
ವುದೇ ನಿನಗೆ ಉತ್ತಮ.

### ತಪ್ಪಿಸಿಕೊಂಡ ಕುರಿಯ ಸಾಮ್ಯ
(ಲೂಕ 15:3-7)

10“ಎಚ್ಚರವಾಗಿರಿ! ಈ ಚಿಕ್ಕ ಮಕ್ಕಳಿಗೆ ಬೆಲೆಯೇ ಇಲ್ಲವೆಂದು
ನೆನೆಸಬೇಡಿ. ಇವರಿಗಾಗಿ ಪರಲೋಕದಲ್ಲಿ ದೂತರನ್ನು
ನೇಮಿಸಲಾಗಿದೆ. ಆ ದೂತರು ಪರಲೋಕದಲ್ಲಿರುವ ನನ್ನ
ತಂದೆಯ ಸಮ್ಮುಖದಲ್ಲಿ ಇರುತ್ತಾರೆ. 11 *

12“ಒಬ್ಬ ಮನುಷ್ಯನಿಗೆ ನೂರು ಕುರಿಗಳಿದ್ದು ಅದರಲ್ಲಿ
ಒಂದು ಕುರಿಯು ತಪ್ಪಿಸಿಕೊಂಡರೆ, ಅವನು ಉಳಿದ
ತೊಂಭತ್ತೊಂಭತ್ತು ಕುರಿಗಳನ್ನು ಬೆಟ್ಟದ ಮೇಲೆಯೇ ಬಿಟ್ಟು
ತಪ್ಪಿಸಿಕೊಂಡ ಕುರಿಯನ್ನು ಹುಡುಕಲು ಹೋಗುತ್ತಾನಲ್ಲವೇ?
13ತಪ್ಪಿಸಿಕೊಂಡ ಕುರಿಯು ಸಿಕ್ಕಿದರೆ, ತಪ್ಪಿಸಿಕೊಳ್ಳದಿದ್ದ ತೊಂಭ
ತ್ತೊಂಭತ್ತು ಕುರಿಗಳಿಗಿಂತ ಆ ಒಂದು ಕುರಿಯ ವಿಷಯದಲ್ಲಿ
ಅವನು ಬಹಳ ಸಂತೋಷಪಡುವನು ಎಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ. 14ಅದೇ ರೀತಿ ಈ ಚಿಕ್ಕಮಕ್ಕಳಲ್ಲಿ ಒಬ್ಬರಾದರೂ
ತಪ್ಪಿಸಿಕೊಳ್ಳಬಾರದೆಂಬುದೇ ಪರಲೋಕದಲ್ಲಿರುವ ನಿಮ್ಮ
ತಂದೆಯ ಚಿತ್ತವಾಗಿದೆ.

### ಯಾರಾದರೂ ನಿಮಗೆ ತಪ್ಪುಮಾಡಿದಾಗ ಮಾಡತಕ್ಕದ್ದೇನು?
(ಲೂಕ 17:3)

15“ನಿನ್ನ ಸಹೋದರನಾಗಲಿ ಸಹೋದರಿಯಾಗಲಿ ನಿನಗೆ
ಯಾವುದಾದರೂ ತಪ್ಪು ಮಾಡಿದರೆ, ನೀನು ಹೋಗಿ
ಅವನೊಬ್ಬನೇ ಇರುವಾಗ ಅವನ ತಪ್ಪನ್ನು ತಿಳಿಸು. ಅವನು ನಿನ್ನ
ಮಾತಿಗೆ ಕಿವಿಗೊಟ್ಟರೆ, ಮತ್ತೆ ನಿನ್ನ ಸಹೋದರನಾಗಿರಲು ನೀನೇ
ಅವನಿಗೆ ಸಹಾಯ ಮಾಡಿದಂತಾಗುವುದು. 16ಆದರೆ ಅವನು
ನಿನ್ನ ಮಾತನ್ನು ಕೇಳದಿದ್ದರೆ, ನಿನ್ನೊಂದಿಗೆ ಒಬ್ಬಿಬ್ಬರನ್ನು ಕರೆದು
ಕೊಂಡು ಮತ್ತೆ ಅವನ ಬಳಿಗೆ ಹೋಗು. ಆಗ ಪ್ರತಿಯೊಂದು
ದೂರಿನ ವಿಷಯದಲ್ಲೂ ಇಬ್ಬರು ಅಥವಾ ಮೂವರು ಸಾಕ್ಷಿಗಳಿ
ರುವರು. * 17ಅವನು ಅವರ ಮಾತನ್ನೂ ಕೇಳದಿದ್ದರೆ, ಸಭೆಗೆ
ತಿಳಿಸು. ಅವನು ಸಭೆಯ ಮಾತನ್ನೂ ಕೇಳದಿದ್ದರೆ ಅವನನ್ನು
ದೇವರಲ್ಲಿ ನಂಬಿಕೆ ಇಡದ ಮನುಷ್ಯನಂತಾಗಲಿ ಸುಂಕ ವಸೂಲಿ
ಗಾರನಂತಾಗಲಿ ಪರಿಗಣಿಸಿರಿ.

18“ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ಈ
ಲೋಕದಲ್ಲಿ ನೀಡುವ ನಿಷಿದ್ಧಾಜ್ಞೆಯು ದೇವರೇ ನೀಡಿದ
ನಿಷಿದ್ಧಾಜ್ಞೆಯಾಗಿರುತ್ತದೆ. ನೀವು ಭೂಲೋಕದಲ್ಲಿ ನೀಡುವ
ಅನುಮತಿಯು ದೇವರೇ ನೀಡಿದ ಅನುಮತಿಯಾಗಿರುತ್ತದೆ.

19“ಇದಲ್ಲದೆ ನಿಮ್ಮಲ್ಲಿ ಇಬ್ಬರು ಈ ಲೋಕದಲ್ಲಿ ಒಮ್ಮನಸ್ಸಿ
ನಿಂದ ಏನನ್ನೇ ಬೇಡಿಕೊಂಡರೂ ಪರಲೋಕದಲ್ಲಿರುವ ನನ್ನ
ತಂದೆ ಅದನ್ನು ನೆರವೇರಿಸುತ್ತಾನೆ. 20ಇದು ಸತ್ಯ. ಏಕೆಂದರೆ ಎಲ್ಲಿ
ಇಬ್ಬರಾಗಲಿ ಮೂವರಾಗಲಿ ನನ್ನಲ್ಲಿ ನಂಬಿಕೆಯನ್ನಿಟ್ಟು ಒಟ್ಟಾಗಿ
ಸೇರಿಬಂದಿರುತ್ತಾರೊ ಅವರ ಮಧ್ಯದಲ್ಲಿ ನಾನಿರುತ್ತೇನೆ.”

### ಕ್ಷಮಾಪಣೆಯನ್ನು ಕುರಿತ ಸಾಮ್ಯ

21ಆಗ ಪೇತ್ರನು ಯೇಸುವಿನ ಬಳಿಗೆ ಬಂದು, “ಪ್ರಭುವೇ,
ನನ್ನ ಸಹೋದರನು ನನಗೆ ಯಾವುದಾದರೂ ತಪ್ಪು ಮಾಡು
ತ್ತಲೇ ಇದ್ದರೆ ನಾನು ಎಷ್ಟು ಸಲ ಅವನನ್ನು ಕ್ಷಮಿಸಬೇಕು?
ನಾನು ಅವನನ್ನು ಏಳು ಸಲ ಕ್ಷಮಿಸಬೇಕೋ?” ಎಂದು
ಕೇಳಿದನು. 22ಯೇಸು, “ಏಳು ಸಲಕ್ಕಿಂತಲೂ ಹೆಚ್ಚಾಗಿ
ಕ್ಷಮಿಸಬೇಕು. ಅವನು ನಿನಗೆ ಎಪ್ಪತ್ತೇಳು ಸಲ * ತಪ್ಪು
ಮಾಡಿದರೂ ನೀನು ಅವನನ್ನು ಕ್ಷಮಿಸುತ್ತಲೇ ಇರಬೇಕೆಂದು
ನಾನು ನಿನಗೆ ಹೇಳುತ್ತೇನೆ” ಎಂದನು.

23“ಪರಲೋಕರಾಜ್ಯವು ತನ್ನ ಸೇವಕರು ತನಗೆ ಕೊಡ
ಬೇಕಿದ್ದ ಸಾಲದ ಹಣವನ್ನು ವಸೂಲಿ ಮಾಡಲು ತೀರ್ಮಾನಿಸಿದ
ಒಬ್ಬ ರಾಜನಿಗೆ ಹೋಲಿಕೆಯಾಗಿದೆ. 24ರಾಜನು ತನ್ನ ಹಣವನ್ನು
ವಸೂಲಿ ಮಾಡುವುದಕ್ಕೆ ಪ್ರಾರಂಭಿಸಿದನು. ಒಬ್ಬ ಸೇವಕನು
ಹತ್ತು ಸಾವಿರ ಬೆಳ್ಳಿಯ ನಾಣ್ಯಗಳನ್ನು ರಾಜನಿಗೆ ಸಾಲಕೊಡ
ಬೇಕಿತ್ತು. 25ಆ ಸೇವಕನು ತನ್ನ ಯಜಮಾನನಾದ ರಾಜನಿಗೆ
ಹಣವನ್ನು ಕೊಡಲು ಸಮರ್ಥನಾಗಿರಲಿಲ್ಲ. ಆದ್ದರಿಂದ ಆ
ಸೇವಕನನ್ನು ಮತ್ತು ಅವನಲ್ಲಿದ್ದ ಪ್ರತಿಯೊಂದನ್ನೂ ಅವನ
ಹೆಂಡತಿ ಮತ್ತು ಮಕ್ಕಳ ಸಮೇತವಾಗಿ ಮಾರಿ, ಬಂದ ಹಣ
ವನ್ನೆಲ್ಲಾ ಕೊಡಬೇಕಾದ ಸಾಲಕ್ಕೆ ವಜಾ ಮಾಡಬೇಕೆಂದು
ರಾಜನು ಆಜ್ಞಾಪಿಸಿದನು.

26“ಆಗ ಸೇವಕನು ರಾಜನ ಕಾಲಿಗೆ ಬಿದ್ದು, “ಸ್ವಲ್ಪ ತಾಳ್ಮೆ
ತಂದುಕೊಳ್ಳಿ. ನಾನು ನಿಮಗೆ ಕೊಡಬೇಕಾದ ಸಾಲವನ್ನೆಲ್ಲಾ
ತೀರಿಸುತ್ತೇನೆ ” ಎಂದು ಬೇಡಿಕೊಂಡನು. 27ರಾಜನು ತನ್ನ
ಸೇವಕನ ವಿಷಯದಲ್ಲಿ ದುಃಖಪಟ್ಟು ಅವನು ಕೊಡಬೇಕಾದ
ಸಾಲವನ್ನು ಮನ್ನಿಸಿ ಅವನನ್ನು ಬಿಡುಗಡೆ ಮಾಡಿದನು.

28“ತರುವಾಯ, ಅದೇ ಸೇವಕನು ತನಗೆ ನೂರು ಬೆಳ್ಳಿಯ
ನಾಣ್ಯಗಳನ್ನು ಕೊಡಬೇಕಾಗಿದ್ದ ಬೇರೊಬ್ಬ ಸೇವಕನನ್ನು ಕಂಡು
ಅವನ ಕುತ್ತಿಗೆ ಹಿಡಿದು, ‘ನೀನು ನನಗೆ ಕೊಡಬೇಕಾಗಿರುವ
ಹಣವನ್ನು ಕೊಡು’ ಎಂದನು.

---

**ವಚನ 11** ಕೆಲವು ಗ್ರೀಕ್ ಪ್ರತಿಗಳಲ್ಲಿ ‘ಮನುಷ್ಯಕುಮಾರನು ತಪ್ಪಿಸಿಕೊಂಡ ಜನರನ್ನು ರಕ್ಷಿಸುವದಕ್ಕೆ ಬಂದನು’ ಎಂಬ 11 ನೆಯ ವಚನವನ್ನು ಸೇರಿಸಿದ್ದಾರೆ.

**ಆದರೆ … ಸಾಕ್ಷಿಗಳಿರುವರು** ಧರ್ಮೋಪದೇಶ. 19:15

**ಎಪ್ಪತ್ತೇಳು ಸಲ** ಅಥವಾ ಏಳೆಪ್ಪತ್ತು ಸಾರಿ

29‘‘ಆ ಸೇವಕನು ಅವನ ಕಾಲಿಗೆ ಬಿದ್ದು, ‘ಸ್ವಲ್ಪ ತಾಳ್ಮೆ
ಯಿಂದಿರು. ನಾನು ನಿನಗೆ ಕೊಡಬೇಕಾದ ಸಾಲವನ್ನೆಲ್ಲಾ
ತೀರಿಸುತ್ತೇನೆ’ ಎಂದು ಬೇಡಿಕೊಂಡನು.
30‘‘ಆದರೆ ಮೊದಲನೇ ಸೇವಕನು ತಾಳಿಕೊಳ್ಳಲಿಲ್ಲ. ತನಗೆ
ಸಾಲ ಕೊಡಬೇಕಾಗಿದ್ದ ಸೇವಕನ ವಿಷಯದಲ್ಲಿ ನ್ಯಾಯಾಧಿ
ಪತಿಗೆ ದೂರುಕೊಟ್ಟು ಅವನನ್ನು ಸೆರೆಮನೆಗೆ ಹಾಕಿಸಿದನು. ಆ
ಸೇವಕನು ಸಾಲ ತೀರಿಸುವವರೆಗೂ ಸೆರೆಮನೆಯಲ್ಲಿ ಇರ
ಬೇಕಾಯಿತು. 31ಇದನ್ನು ಕಂಡ ಇತರ ಸೇವಕರೆಲ್ಲರೂ ಬಹಳ
ವಾಗಿ ದುಃಖಪಟ್ಟು ನಡೆದ ಸಂಗತಿಯನ್ನೆಲ್ಲಾ ಯಜಮಾನನಿಗೆ
ತಿಳಿಸಿದರು.’’
32‘‘ಆಗ ಯಜಮಾನನು ತನ್ನ ಸೇವಕನನ್ನು ಒಳಗೆ ಕರೆದು,
‘ನೀನು ದುಷ್ಟ ಸೇವಕನು. ನೀನು ನನಗೆ ಹೆಚ್ಚು ಹಣ ಕೊಡ
ಬೇಕಾಗಿತ್ತು. ಆದರೆ ನೀನು ನನ್ನನ್ನು ಬೇಡಿಕೊಂಡದ್ದರಿಂದ ನಿನ್ನ
ಸಾಲವನ್ನೆಲ್ಲ ನಾನು ಮನ್ನಿಸಿಬಿಟ್ಟೆ. 33ಹೀಗಿರಲು ನಾನು ನಿನಗೆ
ಕರುಣೆ ತೋರಿದಂತೆ ನಿನ್ನ ಜೊತೆ ಸೇವಕನಿಗೂ ನೀನು ಕರುಣೆ
ತೋರಿಸಬೇಕಿತ್ತು’ ಎಂದು ಹೇಳಿ 34ಬಹುಕೋಪಗೊಂಡು
ಅವನನ್ನು ಶಿಕ್ಷಿಸುವುದಕ್ಕಾಗಿ ಸೆರೆಮನೆಗೆ ಹಾಕಿಸಿದನು. ಆ
ಸೇವಕನು ತನ್ನ ಸಾಲವನ್ನೆಲ್ಲಾ ತೀರಿಸುವ ತನಕ ಸೆರೆಮನೆಯಲ್ಲಿ
ಇರಬೇಕಾಯಿತು.
35ಪರಲೋಕದ ನನ್ನ ತಂದೆಯು ನಿಮಗೆ ಮಾಡುವಂತೆಯೇ
ಈ ರಾಜನು ಮಾಡಿದನು. ನೀವು ನಿಮ್ಮ ಸಹೋದರನನ್ನಾಗಲಿ
ಸಹೋದರಿಯನ್ನಾಗಲಿ ನಿಜವಾಗಿಯೂ ಕ್ಷಮಿಸಬೇಕು. ಇಲ್ಲ
ದಿದ್ದರೆ ಪರಲೋಕದ ನನ್ನ ತಂದೆಯೂ ನಿಮ್ಮನ್ನು ಕ್ಷಮಿಸು
ವುದಿಲ್ಲ’’ ಎಂದು ಹೇಳಿದನು.

### ವಿವಾಹ ವಿಚ್ಛೇದನದ ಕುರಿತು ಯೇಸುವಿನ ಬೋಧನೆ

(ಮಾರ್ಕ 10:1-12)

19 ಯೇಸು ಈ ಸಂಗತಿಗಳನ್ನು ಹೇಳಿದ ಬಳಿಕ
ಗಲಿಲಾಯದಿಂದ ಹೊರಟು ಜೋರ್ಡನ್ ನದಿಯ
ಮತ್ತೊಂದು ತೀರದಲ್ಲಿದ್ದ ಜುದೇಯ ಪ್ರಾಂತ್ಯಕ್ಕೆ ಬಂದನು.
2ಯೇಸುವನ್ನು ಅನೇಕ ಜನರು ಹಿಂಬಾಲಿಸಿದರು. ಯೇಸು ಅಲ್ಲಿ
ರೋಗಿಗಳನ್ನು ಗುಣಪಡಿಸಿದನು.
3ಕೆಲವು ಫರಿಸಾಯರು ಯೇಸುವಿನ ಬಳಿಗೆ ಬಂದು ಆತನನ್ನು
ತಪ್ಪಿನಲ್ಲಿ ಸಿಕ್ಕಿಸುವುದಕ್ಕಾಗಿ, ‘‘ತನ್ನದೇ ಆದ ಯಾವ
ಕಾರಣಕ್ಕಾಗಲಿ ಒಬ್ಬನು ತನ್ನ ಹೆಂಡತಿಯನ್ನು ಬಿಟ್ಟುಬಿಡುವುದು
ಸರಿಯೇ?’’ ಎಂದು ಕೇಳಿದರು.
4ಯೇಸು, ‘‘ನೀವು ನಿಜವಾಗಿಯೂ ಇದನ್ನು ಪವಿತ್ರಗ್ರಂಥ
ದಲ್ಲಿ ಓದಿದ್ದೀರಿ. ದೇವರು ಪ್ರಪಂಚವನ್ನು ಸೃಷ್ಟಿಸಿದಾಗ,
‘ಮನುಷ್ಯರನ್ನು ಗಂಡನ್ನಾಗಿಯೂ ಹೆಣ್ಣನ್ನಾಗಿಯೂ ಸೃಷ್ಟಿಸಿ
ದನು.* 5ಆದಕಾರಣ ದೇವರು, ‘ಪುರುಷನು ತನ್ನ ತಂದೆ
ತಾಯಿಗಳನ್ನು ಬಿಟ್ಟು ತನ್ನ ಹೆಂಡತಿಯನ್ನು ಸೇರಿಕೊಳ್ಳುವನು.
ಅವರಿಬ್ಬರು ಒಂದೇ ಶರೀರವಾಗುವರು* ಎಂದು ಹೇಳಿದನು.
6ಆದ್ದರಿಂದ ಇವರಿಬ್ಬರು ಇನ್ನು ಮೇಲೆ ಇಬ್ಬರಲ್ಲ, ಒಬ್ಬರೇ.
ಅವರಿಬ್ಬರನ್ನು ದೇವರೇ ಒಟ್ಟಿಗೆ ಕೂಡಿಸಿದ್ದಾನೆ. ಆದ್ದರಿಂದ
ಯಾವ ಮನುಷ್ಯನೂ ಅವರನ್ನು ಪ್ರತ್ಯೇಕಿಸಬಾರದು’’ ಎಂದು
ಉತ್ತರ ಕೊಟ್ಟನು.
7ಫರಿಸಾಯರು, ‘‘ಹಾಗಾದರೆ ಒಬ್ಬ ಪುರುಷನು ವಿವಾಹ
ವಿಚ್ಛೇದನ ಪತ್ರವನ್ನು ಬರೆದುಕೊಟ್ಟು ಬಿಟ್ಟು ಬಿಡಬಹುದೆಂದು
ಮೋಶೆಯು ಹೇಳಿದ್ದೇಕೆ?’’ ಎಂದು ಕೇಳಿದರು.
8ಯೇಸು, ‘‘ನೀವು ದೇವರ ಬೋಧನೆಯನ್ನು ಸ್ವೀಕರಿಸದಿದ್ದ
ಕಾರಣ ನಿಮ್ಮ ಹೆಂಡತಿಯರನ್ನು ಬಿಟ್ಟುಬಿಡುವುದಕ್ಕೆ ಮೋಶೆ
ಅವಕಾಶಕೊಟ್ಟನು. ಆದರೆ ಹೆಂಡತಿಯನ್ನು ಬಿಟ್ಟುಬಿಡುವುದಕ್ಕೆ
ಆರಂಭದಲ್ಲಿ ಅವಕಾಶ ಇರಲಿಲ್ಲ. 9ನಾನು ನಿಮಗೆ ಹೇಳು
ವುದೇನೆಂದರೆ, ತನ್ನ ಹೆಂಡತಿಯನ್ನು ಬಿಟ್ಟು ಬೇರೊಬ್ಬಳನ್ನು
ಮದುವೆಯಾಗುವವನು ವ್ಯಭಿಚಾರಿಯಾಗುತ್ತಾನೆ. ಮೊದಲಿನ
ಹೆಂಡತಿಯು ಬೇರೊಬ್ಬನೊಡನೆ ಲೈಂಗಿಕ ಸಂಬಂಧವಿಟ್ಟು
ಕೊಂಡಿದ್ದರೆ ಮಾತ್ರ ಅವನು ಆಕೆಯನ್ನು ಬಿಟ್ಟು ಬೇರೊಬ್ಬಳನ್ನು
ಮದುವೆ ಆಗಬಹುದು’’ ಎಂದು ಉತ್ತರಿಸಿದನು.
10ಶಿಷ್ಯರು ಯೇಸುವಿಗೆ, ‘‘ಒಬ್ಬನು ತನ್ನ ಹೆಂಡತಿಯನ್ನು
ಬಿಟ್ಟುಬಿಡಲು ಇದೊಂದೇ ಕಾರಣವಾಗಿದ್ದರೆ ಮದುವೆ ಆಗ
ದಿರುವುದೇ ಉತ್ತಮ’’ ಎಂದರು.
11ಅದಕ್ಕೆ ಯೇಸು, ‘‘ಮದುವೆಯ ವಿಷಯವಾದ ಈ
ಸತ್ಯವನ್ನು ಪ್ರತಿಯೊಬ್ಬರೂ ಸ್ವೀಕರಿಸಲು ಸಾಧ್ಯವಿಲ್ಲ. ಇದನ್ನು
ಸ್ವೀಕರಿಸಲು ದೇವರು ಯಾರನ್ನು ಸಮರ್ಥರನ್ನಾಗಿ ಮಾಡಿ
ದ್ದಾನೊ ಅವರಿಗೆ ಮಾತ್ರ ಸಾಧ್ಯ. 12ಕೆಲವರು ಮದುವೆ ಆಗ
ದಿರಲು ಬೇರೆ ಬೇರೆ ಕಾರಣಗಳಿವೆ. ಹುಟ್ಟಿದಂದಿನಿಂದಲೇ
ಕೆಲವರು ನಪುಂಸಕರಾಗಿರುತ್ತಾರೆ. ಇನ್ನು ಕೆಲವರು ಬೇರೆಯವ
ರಿಂದ ನಪುಂಸಕರಾಗಿ ಮಾಡಲ್ಪಡುತ್ತಾರೆ. ಬೇರೆ ಕೆಲವರು ಪರ
ಲೋಕರಾಜ್ಯಕ್ಕೋಸ್ಕರ ಮದುವೆಯನ್ನು ತೊರೆದುಬಿಡುತ್ತಾರೆ.
ಆದರೆ ಮದುವೆ ಆಗುವಂಥವನು ಮದುವೆ ವಿಷಯವಾದ ಈ
ಬೋಧನೆಯನ್ನು ಸ್ವೀಕರಿಸಬೇಕು’’ ಎಂದು ಉತ್ತರ ಕೊಟ್ಟನು.

### ಯೇಸುವಿನಿಂದ ಮಕ್ಕಳಿಗೆ ಸ್ವಾಗತ

(ಮಾರ್ಕ 10:13-16; ಲೂಕ 18:15-17)

13ಬಳಿಕ ಜನರು ಯೇಸುವಿನ ಬಳಿಗೆ ಬಂದು ತಮ್ಮ ಚಿಕ್ಕ
ಮಕ್ಕಳನ್ನು ತಂದು ಅವರಿಗಾಗಿ ಪ್ರಾರ್ಥಿಸಬೇಕೆಂದು ಆತನನ್ನು
ಬೇಡಿಕೊಂಡರು. ಇದನ್ನು ಕಂಡ ಶಿಷ್ಯರು ಚಿಕ್ಕ ಮಕ್ಕಳನ್ನು ಆತನ
ಬಳಿಗೆ ತರಕೂಡದೆಂದು ಗದರಿಸಿದರು. 14ಆದರೆ ಯೇಸು,
‘‘ಚಿಕ್ಕಮಕ್ಕಳನ್ನು ನನ್ನ ಬಳಿಗೆ ಬರಗೊಡಿಸಿರಿ. ಅವರಿಗೆ ಅಡ್ಡಿ
ಮಾಡಬೇಡಿ. ಏಕೆಂದರೆ ಪರಲೋಕರಾಜ್ಯ ಈ ಚಿಕ್ಕ ಮಕ್ಕಳಂಥ
ವರದೇ’’ ಎಂದನು. 15ನಂತರ ಯೇಸು ತನ್ನ ಕೈಗಳನ್ನು ಮಕ್ಕಳ
ಮೇಲೆ ಇಟ್ಟು ಆಶೀರ್ವದಿಸಿದನು. ಬಳಿಕ ಅಲ್ಲಿಂದ ಹೊರಟು
ಹೋದನು.

### ಧನಿಕ ಯುವಕನ ಸಮಸ್ಯೆ

(ಮಾರ್ಕ 10:17-31; ಲೂಕ 18:18-30)

16ಒಬ್ಬನು ಯೇಸುವಿನ ಬಳಿಗೆ ಬಂದು, ‘‘ಬೋಧಕನೇ
ನಾನು ನಿತ್ಯಜೀವ ಹೊಂದಲು ಯಾವ ಒಳ್ಳೆಯ ಕಾರ್ಯವನ್ನು
ಮಾಡಬೇಕು’’ ಎಂದು ಕೇಳಿದನು.
17ಯೇಸು, ‘‘ಒಳ್ಳೆಯದನ್ನು ಕುರಿತು ನೀನು ನನ್ನನ್ನು
ಕೇಳುವುದೇಕೆ? ದೇವರೊಬ್ಬನೇ ಒಳ್ಳೆಯವನು. ಆದರೆ ನೀನು

---

**ಮನುಷ್ಯರನ್ನು ... ಸೃಷ್ಟಿಸಿದನು** ಆದಿಕಾಂಡ 1:27;5:2.

**ಪುರುಷನು ... ವಾಗುವರು** ಆದಿಕಾಂಡ 2:24

ನಿತ್ಯಜೀವವನ್ನು ಹೊಂದಬೇಕೆಂದಿದ್ದರೆ ಈ ಆಜ್ಞೆಗಳಿಗೆ ವಿಧೇಯನಾಗು '' ಎಂದು ಉತ್ತರ ಕೊಟ್ಟನು.

18ಆ ಮನುಷ್ಯನು, ''ಯಾವ ಆಜ್ಞೆಗಳು'' ಎಂದು ಕೇಳಿದನು. ಯೇಸು ''ಕೊಲೆಮಾಡಬಾರದು, ವ್ಯಭಿಚಾರ ಮಾಡಬಾರದು, ಕದಿಯಬಾರದು, ಸುಳ್ಳುಸಾಕ್ಷಿ ಹೇಳಬಾರದು. 19ನಿನ್ನ ತಂದೆ ತಾಯಿಗಳನ್ನು ಗೌರವಿಸಬೇಕು, ಮತ್ತು ನಿನ್ನನ್ನು ನೀನು ಪ್ರೀತಿಸುವಂತೆ ಬೇರೆಯವರನ್ನೂ ಪ್ರೀತಿಸಬೇಕು* ಎಂದು ಉತ್ತರ ಕೊಟ್ಟನು.

20ಆ ಯುವಕನು, ''ನಾನು ಇವೆಲ್ಲವುಗಳಿಗೆ ವಿಧೇಯನಾಗಿದ್ದೇನೆ. ನಾನು ಬೇರೆ ಏನಾದರೂ ಮಾಡಬೇಕೇ? ಎಂದು ಕೇಳಿದನು.

21ಯೇಸು, ''ನೀನು ಸಂಪೂರ್ಣನಾಗಬೇಕೆಂದಿದ್ದರೆ ಹೋಗಿ ನಿನ್ನ ಆಸ್ತಿಯನ್ನೆಲ್ಲಾ ಮಾರಿ, ಬಂದ ಹಣವನ್ನು ಬಡವರಿಗೆ ಕೊಡು. ಆಗ ನಿನಗೆ ಪರಲೋಕದಲ್ಲಿ ದೊಡ್ಡ ಭಂಡಾರ ಇರುವುದು. ನಂತರ ಬಂದು ನನ್ನನ್ನು ಹಿಂಬಾಲಿಸು!'' ಎಂದು ಉತ್ತರ ಕೊಟ್ಟನು.

22ಇದನ್ನು ಕೇಳಿದಾಗ ಅವನು ಬಹಳ ದುಃಖದಿಂದ ಹೊರಟುಹೋದನು. ಏಕೆಂದರೆ ಅವನು ದೊಡ್ಡ ಐಶ್ವರ್ಯವಂತನಾಗಿದ್ದನು.

23ಆಗ ಯೇಸು ತನ್ನ ಶಿಷ್ಯರಿಗೆ, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಐಶ್ವರ್ಯವಂತನು ಪರಲೋಕರಾಜ್ಯಕ್ಕೆ ಪ್ರವೇಶಿಸುವುದು ಬಹಳ ಕಷ್ಟಕರ. 24ಹೌದು, ಐಶ್ವರ್ಯವಂತನು ದೇವರ ರಾಜ್ಯ ಪ್ರವೇಶಿಸುವುದಕ್ಕಿಂತ ಒಂಟೆಯು ಸೂಜಿಯ ಕಣ್ಣಿನಲ್ಲಿ ನುಸುಳುವುದು ಸುಲಭ ಎಂದು ನಾನು ನಿಮಗೆ ಹೇಳುತ್ತೇನೆ '' ಎಂದನು.

25ಶಿಷ್ಯರು ಇದನ್ನು ಕೇಳಿ ಬಹಳ ಆಶ್ಚರ್ಯದಿಂದ, ''ಹಾಗಾದರೆ ಯಾರು ರಕ್ಷಣೆ ಹೊಂದಬಲ್ಲರು'' ಎಂದು ಕೇಳಿದರು.

26ಯೇಸು ತನ್ನ ಶಿಷ್ಯರ ಕಡೆಗೆ ದೃಷ್ಟಿಸಿ, ''ಇದು ಮನುಷ್ಯರಿಗೆ ಅಸಾಧ್ಯವಾದ ಕಾರ್ಯ. ಆದರೆ ದೇವರಿಗೆ ಎಲ್ಲವೂ ಸಾಧ್ಯ'' ಎಂದು ಹೇಳಿದನು.

27ಪೇತ್ರನು ಯೇಸುವಿಗೆ, ''ನಾವು ನಮಗಿದ್ದ ಪ್ರತಿಯೊಂದನ್ನೂ ಬಿಟ್ಟು ನಿನ್ನನ್ನು ಹಿಂಬಾಲಿಸಿದೆವು. ನಮಗೆ ಏನು ದೊರಕುವುದು'' ಎಂದನು.

28ಯೇಸು ಶಿಷ್ಯರಿಗೆ ಇಂತೆಂದನು : ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಹೊಸ ಲೋಕವು ಸೃಷ್ಟಿಸಲ್ಪಟ್ಟಾಗ ಮನುಷ್ಯಕುಮಾರನು ತನ್ನ ಮಹಾಸಿಂಹಾಸನದ ಮೇಲೆ ಕುಳಿತುಕೊಳ್ಳುವನು. ನನ್ನನ್ನು ಹಿಂಬಾಲಿಸಿದ ನೀವೆಲ್ಲರೂ ಸಿಂಹಾಸನಗಳ ಮೇಲೆ ಕುಳಿತು ಇಸ್ರೇಲಿನ ಹನ್ನೆರಡು ಕುಲಗಳಿಗೆ ನ್ಯಾಯ ತೀರಿಸುವಿರಿ. 29ನನ್ನನ್ನು ಹಿಂಬಾಲಿಸಲು ತಮ್ಮ ಮನೆಗಳನ್ನು, ಸಹೋದರ ಸಹೋದರಿಯರನ್ನು, ತಂದೆ ತಾಯಿಗಳನ್ನು, ಮಕ್ಕಳನ್ನು ಇಲ್ಲವೇ ಆಸ್ತಿಯನ್ನು ತ್ಯಜಿಸಿದ ಪ್ರತಿಯೊಬ್ಬರು ತಾವು ಬಿಟ್ಟವುಗಳಿಗಿಂತ ಹೆಚ್ಚಾಗಿ ಪಡೆಯುತ್ತಾರೆ. ಅಲ್ಲದೆ ನಿತ್ಯಜೀವವನ್ನೂ ಹೊಂದಿಕೊಳ್ಳುತ್ತಾರೆ. 30ಆದರೆ ಮೊದಲನೆಯವರಲ್ಲಿ ಅನೇಕರು ಕಡೆಯವರಾಗುವರು; ಕಡೆಯವರಲ್ಲಿ ಅನೇಕರು ಮೊದಲಿನವರಾಗುವರು.

## ದ್ರಾಕ್ಷಿತೋಟದಲ್ಲಿ ಕೆಲಸ ಮಾಡುವವರನ್ನು ಕುರಿತು ಯೇಸು ಹೇಳಿದ ಸಾಮ್ಯ

20 ''ಪರಲೋಕರಾಜ್ಯವು ಒಬ್ಬ ದ್ರಾಕ್ಷಿ ತೋಟದ ಯಜಮಾನನಿಗೆ ಹೋಲಿಕೆಯಾಗಿದೆ. ಒಂದು ಮುಂಜಾನೆ ಅವನು ತನ್ನ ತೋಟದಲ್ಲಿ ಕೆಲಸ ಮಾಡಲು ಬೇರೆ ಕೂಲಿಯಾಳುಗಳನ್ನು ಕರೆಯುವುದಕ್ಕೆ ಹೊರಟನು. 2ಒಂದು ದಿನಕ್ಕೆ ಒಬ್ಬ ಕೆಲಸಗಾರನಿಗೆ ಒಂದು ಬೆಳ್ಳಿನಾಣ್ಯವನ್ನು ಕೊಡುವುದಾಗಿ ಹೇಳಿ ಆ ಕೆಲಸಗಾರರನ್ನು ಅವನು ತೋಟಕ್ಕೆ ಕಳುಹಿಸಿದನು.

3''ಸುಮಾರು ಒಂಭತ್ತು ಗಂಟೆಗೆ ಯಜಮಾನನು ಪೇಟೆಯ ಸ್ಥಳಕ್ಕೆ ಹೋದನು. ಏನೂ ಕೆಲಸವಿಲ್ಲದೆ ಸುಮ್ಮನೆ ನಿಂತಿದ್ದ ಕೆಲವರನ್ನು ಅವನು ಅಲ್ಲಿ ಕಂಡನು. 4ಅವನು ಅವರಿಗೆ, 'ನೀವು ಹೋಗಿ ನನ್ನ ತೋಟದಲ್ಲಿ ಕೆಲಸ ಮಾಡುವದಾದರೆ ನಿಮ್ಮ ಕೆಲಸಕ್ಕೆ ಯೋಗ್ಯವಾದ ಕೂಲಿಯನ್ನು ಕೊಡುತ್ತೇನೆ ' ಎಂದು ಹೇಳಿದನು. 5ಆ ಕೂಲಿಯಾಳುಗಳು ಕೆಲಸ ಮಾಡಲು ಅವನ ತೋಟಕ್ಕೆ ಹೋದರು.

''ಆ ಯಜಮಾನನು ಅದೇ ರೀತಿ ಸುಮಾರು ಹನ್ನೆರಡು ಗಂಟೆಗೊಮ್ಮೆ ಮತ್ತೆ ಮೂರು ಗಂಟೆಗೊಮ್ಮೆ ಪೇಟೆಗೆ ಹೋದನು. ಆ ಎರಡು ಸಲವೂ ತನ್ನ ಹೊಲದಲ್ಲಿ ಕೆಲಸ ಮಾಡಲು ಬೇರೆ ಕೆಲವು ಕೂಲಿಯವರನ್ನು ಅವನು ಗೊತ್ತುಮಾಡಿದನು. 6ಸುಮಾರು ಐದು ಗಂಟೆಗೆ ಆ ಯಜಮಾನನು ಮತ್ತೊಮ್ಮೆ ಪೇಟೆಗೆ ಹೋದನು. ಅಲ್ಲಿ ನಿಂತಿದ್ದ ಕೆಲವರನ್ನು ಅವನು ಕಂಡು, 'ನೀವು ದಿನವಿಡೀ ಕೆಲಸ ಮಾಡದೆ ಸುಮ್ಮನೆ ಏಕೆ ನಿಂತಿದ್ದೀರಿ' ಎಂದು ಕೇಳಿದನು.

7''ಅದಕ್ಕೆ ಅವರು, 'ನಮಗೆ ಯಾರೂ ಕೆಲಸಕೊಡಲಿಲ್ಲ' ಎಂದು ಉತ್ತರ ಕೊಟ್ಟರು. ಆ ಯಜಮಾನನು, 'ಹಾಗಾದರೆ ನೀವು ಹೋಗಿ ನನ್ನ ತೋಟದಲ್ಲಿ ಕೆಲಸ ಮಾಡಿರಿ' ಎಂದು ಹೇಳಿದನು.

8''ಅಂದು ಸಾಯಂಕಾಲ, ತೋಟದ ಯಜಮಾನನು ಕೆಲಸಗಾರರನ್ನು ನೋಡಿಕೊಳ್ಳುವವನಿಗೆ, 'ಕೂಲಿಯಾಳುಗಳನ್ನು ಕರೆದು ಕೊನೆಗೆ ಬಂದವರಿಂದ ಆರಂಭಿಸಿ ಮೊದಲು ಬಂದವರ ತನಕ ಕೂಲಿಕೊಡು' ಎಂದನು.

9ಐದು ಗಂಟೆಯ ಸಮಯದಲ್ಲಿ ಕೂಲಿಯಾಳುಗಳು ತಮ್ಮ ಕೂಲಿಯನ್ನು ತೆಗೆದುಕೊಳ್ಳಲು ಬಂದರು. ಪ್ರತಿಯೊಬ್ಬ ಆಳಿಗೂ ಒಂದೊಂದು ಬೆಳ್ಳಿನಾಣ್ಯ ಸಿಕ್ಕಿತು. 10ಮೊಟ್ಟಮೊದಲು ಗೊತ್ತುಮಾಡಲ್ಪಟ್ಟಿದ್ದವರು ತಮ್ಮ ಕೂಲಿಯನ್ನು ತೆಗೆದುಕೊಳ್ಳಲು ಬಂದರು. ಬೇರೆ ಆಳುಗಳಿಗಿಂತ ತಮಗೆ ಹೆಚ್ಚು ಸಿಕ್ಕುವುದೆಂದು ಅವರು ಆಲೋಚಿಸಿಕೊಂಡಿದ್ದರು. ಆದರೆ ಅವರಿಗೂ ಸಹ ಒಂದೊಂದು ಬೆಳ್ಳಿನಾಣ್ಯ ಸಿಕ್ಕಿತು. 11ಅವರು ತಮ್ಮ ಬೆಳ್ಳಿನಾಣ್ಯವನ್ನು ತೆಗೆದುಕೊಂಡಾಗ ತೋಟದ ಯಜಮಾನನ ಬಗ್ಗೆ ಗೊಣಗುಟ್ಟುತ್ತಾ, 12'ಕೊನೆಗೆ ಗೊತ್ತುಮಾಡಲ್ಪಟ್ಟ ಆಳುಗಳು ಒಂದು ಗಂಟೆ ಮಾತ್ರ ಕೆಲಸ ಮಾಡಿದ್ದಾರೆ. ಆದರೆ ಇವನು ಅವರಿಗೂ ನಮ್ಮಷ್ಟೇ ಕೊಟ್ಟಿದ್ದಾನೆ. ನಾವಾದರೊ ದಿನವೆಲ್ಲಾ ಬಿಸಿಲಿನಲ್ಲಿ ಕಷ್ಟಪಟ್ಟು ಕೆಲಸ ಮಾಡಿದ್ದೇವೆ 'ಎಂದರು.

---

**ಕೊಲೆ … ಪ್ರೀತಿಸಬೇಕು** ಯಾಜಕ. 19:18; ವಿಮೋಚನ. 20:12-16; ಧರ್ಮೋಪದೇಶ. 5 :16-20

13‘‘ತೋಟದ ಯಜಮಾನನು ಆ ಆಳುಗಳಲ್ಲಿ ಒಬ್ಬನಿಗೆ, ‘ಸ್ನೇಹಿತನೇ, ನಾನು ನಿನಗೆ ಅನ್ಯಾಯ ಮಾಡಲಿಲ್ಲ. ನೀನು ಒಂದು ಬೆಳ್ಳಿನಾಣ್ಯಕ್ಕಾಗಿ ಕೆಲಸ ಮಾಡಲು ಒಪ್ಪಿಕೊಂಡೆಯಲ್ಲವೇ? 14ಆದ್ದರಿಂದ ನೀನು ನಿನ್ನ ಕೂಲಿಯನ್ನು ತೆಗೆದುಕೊಂಡು ಹೋಗು. ನಾನು ನಿನಗೆ ಎಷ್ಟು ಕೂಲಿ ಕೊಟ್ಟೆನೋ ಅಷ್ಟೇ ಕೂಲಿಯನ್ನು ಕೊನೆಗೆ ಗೊತ್ತುಮಾಡಲ್ಪಟ್ಟವನಿಗೂ ಕೊಡಲು ಇಷ್ಟಪಡುತ್ತೇನೆ. 15ನನ್ನ ಸ್ವಂತ ಹಣವನ್ನು ನನಗೆ ಇಷ್ಟಬಂದ ಹಾಗೆ ನಾನು ಕೊಡಬಹುದಲ್ಲವೇ? ನಾನು ಅವರಿಗೆ ಒಳ್ಳೆಯದನ್ನು ಮಾಡಿದ್ದಕ್ಕಾಗಿ ನೀನು ಹೊಟ್ಟೆಕಿಚ್ಚು ಪಡುವೆಯಾ?’ ಎಂದನು.

16‘‘ಇದೇ ಪ್ರಕಾರ ಕಡೆಯವರು ಮೊದಲಿನವರಾಗುವರು, ಮೊದಲಿನವರು ಕಡೆಯವರಾಗುವರು.’’

### ತನ್ನ ಮರಣದ ಬಗ್ಗೆ ಯೇಸುವಿನ ಮೂರನೆ ಪ್ರಕಟನೆ

(ಮಾರ್ಕ 10:32-34; ಲೂಕ 18:31-34)

17ಯೇಸು ಜೆರುಸಲೇಮಿಗೆ ಹೋಗುತ್ತಿದ್ದನು. ಆತನ ಹನ್ನೆರಡು ಮಂದಿ ಶಿಷ್ಯರೂ ಆತನೊಂದಿಗೆ ಇದ್ದರು. ಯೇಸು ಅವರನ್ನು ಪ್ರತ್ಯೇಕವಾಗಿ ಕರೆದು, 18‘‘ನಾವು ಜೆರುಸಲೇಮಿಗೆ ಹೋಗುತ್ತಿದ್ದೇವೆ. ಮನುಷ್ಯಕುಮಾರನನ್ನು ಮಹಾಯಾಜಕರಿಗೆ ಮತ್ತು ಧರ್ಮೋಪದೇಶಕರಿಗೆ ಒಪ್ಪಿಸಿಕೊಡಲಾಗುವುದು. ಅವರು ಆತನನ್ನು ಯೆಹೂದ್ಯರಲ್ಲದವರ ಕೈಗೆ ಒಪ್ಪಿಸುವರು. 19ಅವರು ಮನುಷ್ಯಕುಮಾರನನ್ನು ಅಪಹಾಸ್ಯ ಮಾಡಿ, ಕೊರಡೆಗಳಿಂದ ಹೊಡೆದು, ಶಿಲುಬೆಗೇರಿಸುವರು. ಆದರೆ ಆತನು ಮರಣ ಹೊಂದಿದ ನಂತರ ಮೂರನೆಯ ದಿನದಂದು ಮತ್ತೆ ಜೀವಂತನಾಗಿ ಎದ್ದುಬರುವನು’’ ಎಂದು ಹೇಳಿದನು.

### ತಾಯಿಯೊಬ್ಬಳ ವಿಶೇಷ ಕೋರಿಕೆ

(ಮಾರ್ಕ 10:35-45)

20ಆಗ ಜೆಬೆದಾಯನ ಹೆಂಡತಿಯು ಯೇಸುವಿನ ಬಳಿಗೆ ಬಂದಳು. ಅವಳ ಗಂಡುಮಕ್ಕಳು ಅವಳೊಂದಿಗಿದ್ದರು. ಅವಳು ಯೇಸುವಿನ ಮುಂದೆ ಅಡ್ಡಬಿದ್ದು ತನ್ನ ಕೋರಿಕೆಯನ್ನು ಈಡೇರಿಸಬೇಕೆಂದು ಕೇಳಿಕೊಂಡಳು.

21ಯೇಸು, ‘‘ನಿನ್ನ ಕೋರಿಕೆ ಏನು?’’ ಎಂದನು. ಅವಳು, ‘‘ನಿನ್ನ ರಾಜ್ಯದಲ್ಲಿ, ನನ್ನ ಗಂಡುಮಕ್ಕಳಲ್ಲಿ ಒಬ್ಬನು ನಿನ್ನ ಬಲಗಡೆಯಲ್ಲಿಯೂ ಮತ್ತೊಬ್ಬನು ನಿನ್ನ ಎಡಗಡೆಯಲ್ಲಿಯೂ ಕುಳಿತುಕೊಳ್ಳುವಂತೆ ವಾಗ್ದಾನ ಮಾಡು’’ ಎಂದು ಕೇಳಿಕೊಂಡಳು.

22ಯೇಸು ಅವಳ ಮಕ್ಕಳಿಗೆ, ‘‘ನೀವು ಏನು ಕೇಳಿಕೊಳ್ಳುತ್ತಿದ್ದೀರೆಂಬುದೇ ನಿಮಗೆ ಗೊತ್ತಿಲ್ಲ. ನಾನು ಅನುಭವಿಸಬೇಕಾಗಿರುವ ಸಂಕಟವನ್ನು ಅನುಭವಿಸಲು ನಿಮಗೆ ಸಾಧ್ಯವೋ’’ ಎಂದು ಕೇಳಿದನು.

ಅದಕ್ಕೆ ಅವರು, ‘‘ಹೌದು, ನಮಗೆ ಸಾಧ್ಯ’’ ಎಂದು ಉತ್ತರ ಕೊಟ್ಟರು. 23ಯೇಸು ಅವರಿಗೆ, ‘‘ನಾನು ಅನುಭವಿಸಲಿರುವ ಸಂಕಟಗಳನ್ನು ನೀವು ನಿಜವಾಗಿಯೂ ಅನುಭವಿಸುವಿರಿ. ಆದರೆ ನನ್ನ ಬಲಗಡೆಯಲ್ಲಾಗಲಿ ಎಡಗಡೆಯಲ್ಲಾಗಲಿ ಕುಳಿತುಕೊಳ್ಳುವವನನ್ನು ಆಯ್ಕೆಮಾಡುವವನು ನಾನಲ್ಲ. ನನ್ನ ತಂದೆಯು ಆ ಸ್ಥಳಗಳನ್ನು ಯಾರಿಗಾಗಿ ಕಾಯ್ದಿರಿಸಿದ್ದಾನೊ ಅವರಿಗೇ ಆ ಅವಕಾಶವನ್ನು ಕೊಡುತ್ತಾನೆ’’ ಎಂದನು.

24ಉಳಿದ ಹತ್ತು ಮಂದಿ ಶಿಷ್ಯರು ಇದನ್ನು ಕೇಳಿದಾಗ ಆ ಇಬ್ಬರು ಶಿಷ್ಯರ ಮೇಲೆ ಕೋಪಗೊಂಡರು. 25ಯೇಸು ಶಿಷ್ಯರನ್ನೆಲ್ಲ ಒಟ್ಟಿಗೆ ಕರೆದು, ‘‘ಯೆಹೂದ್ಯರಲ್ಲದ ಅಧಿಪತಿಗಳು ಜನರ ಮೇಲೆ ತಮ್ಮ ಅಧಿಕಾರ ತೋರಿಸಲು ಇಷ್ಟಪಡುತ್ತಾರೆ ಎಂಬುದು ನಿಮಗೆ ಗೊತ್ತಿದೆ. ಮತ್ತು ಅವರ ಪ್ರಮುಖ ನಾಯಕರು ಜನರ ಮೇಲೆ ತಮ್ಮ ಅಧಿಕಾರವನ್ನೆಲ್ಲಾ ಚಲಾಯಿಸಲು ಇಷ್ಟಪಡುತ್ತಾರೆ. 26ಆದರೆ ನೀವು ಹಾಗೆ ಮಾಡಬಾರದು. ನಿಮ್ಮಲ್ಲಿ ದೊಡ್ಡವನಾಗಲು ಇಚ್ಛಿಸುವವನು ಸೇವಕನಂತೆ ಸೇವೆ ಮಾಡಬೇಕು. 27ನಿಮ್ಮಲ್ಲಿ ಮೊದಲನೆಯವನಾಗಲು ಇಚ್ಛಿಸುವವನು ಗುಲಾಮನಂತೆ ಸೇವೆ ಮಾಡಬೇಕು. 28ಇದೇ ನಿಯಮ ಮನುಷ್ಯಕುಮಾರನಿಗೂ ಅನ್ವಯಿಸುತ್ತದೆ. ಮನುಷ್ಯಕುಮಾರನು ಬೇರೆಯವರಿಂದ ಸೇವೆ ಮಾಡಿಸಿಕೊಳ್ಳಲು ಬರದೆ, ಬೇರೆಯವರಿಗೆ ಸೇವೆ ಮಾಡುವುದಕ್ಕಾಗಿ ಮತ್ತು ಅನೇಕ ಜನರನ್ನು ರಕ್ಷಿಸುವುದಕ್ಕಾಗಿ ತನ್ನ ಪ್ರಾಣವನ್ನೇ ಈಡುಕೊಡಲು ಬಂದನು’’ ಎಂದು ಹೇಳಿದನು.

### ಇಬ್ಬರು ಕುರುಡರಿಗೆ ಯೇಸುವಿನಿಂದ ಸ್ವಸ್ಥತೆ

(ಮಾರ್ಕ 10:46-52; ಲೂಕ 18:35-43)

29ಯೇಸು ಮತ್ತು ಆತನ ಶಿಷ್ಯರು ಜೆರಿಕೋವಿನಿಂದ ಹೊರಟು ಹೋಗುತ್ತಿರುವಾಗ ಬಹಳ ಜನರು ಯೇಸುವನ್ನು ಹಿಂಬಾಲಿಸಿದರು. 30ದಾರಿಯ ಪಕ್ಕದಲ್ಲಿ ಇಬ್ಬರು ಕುರುಡರು ಕುಳಿತಿದ್ದರು. ಯೇಸು ಈ ಮಾರ್ಗವಾಗಿ ಹೋಗುತ್ತಿದ್ದಾನೆಂಬುದನ್ನು ಅವರು ಕೇಳಿದಾಗ, ‘‘ಪ್ರಭುವೇ, ದಾವೀದನ ಕುಮಾರನೇ, ದಯಮಾಡಿ ನಮಗೆ ಸಹಾಯ ಮಾಡು!’’ ಎಂದು ಕೂಗಿಕೊಂಡರು.

31ಜನರೆಲ್ಲರೂ ಕುರುಡರನ್ನು ಗದರಿಸಿ, ಸುಮ್ಮನಿರಬೇಕೆಂದು ಹೇಳಿದರು. ಆದರೆ ಆ ಕುರುಡರು, ‘‘ಪ್ರಭುವೇ, ದಾವೀದನ ಕುಮಾರನೇ, ದಯಮಾಡಿ ನಮಗೆ ಸಹಾಯ ಮಾಡು!’’ ಎಂದು ಹೆಚ್ಚುಹೆಚ್ಚು ಕೂಗಿಕೊಂಡರು.

32ಯೇಸು ನಿಂತು, ಆ ಕುರುಡರಿಗೆ ‘‘ ನಾನು ನಿಮಗೆ ಏನು ಮಾಡಬೇಕೆಂದು ಆಶಿಸುತ್ತೀರಿ ’’ ಎಂದನು.

33ಆಗ ಕುರುಡರು, ‘‘ಪ್ರಭುವೇ, ನಮಗೆ ಕಣ್ಣು ಕಾಣಿಸುವಂತೆ ಮಾಡು!’’ ಅಂದರು. 34ಯೇಸು ಅವರಿಗಾಗಿ ದುಃಖಪಟ್ಟು ಅವರ ಕಣ್ಣುಗಳನ್ನು ಮುಟ್ಟಿದನು. ಕೂಡಲೇ ಅವರಿಗೆ ದೃಷ್ಟಿ ಬಂದಿತು. ಬಳಿಕ ಅವರು ಯೇಸುವನ್ನು ಹಿಂಬಾಲಿಸಿದರು.

### ಅರಸನಂತೆ ಯೇಸುವಿನ ಪ್ರವೇಶ

(ಮಾರ್ಕ 11:1-11; ಲೂಕ 19:28-38; ಯೋಹಾನ 12:12-19)

21 ಯೇಸು ಮತ್ತು ಆತನ ಶಿಷ್ಯರು ಜೆರುಸಲೇಮಿನತ್ತ ಪ್ರಯಾಣ ಮಾಡುತ್ತಾ ಆಲಿವ್‌ಗುಡ್ಡದ ಸಮೀಪದಲ್ಲಿದ್ದ ಬೆತ್ಫಗೆಯನ್ನು ಸಮೀಪಿಸಿದರು. 2ಅಲ್ಲಿ ಯೇಸು ತನ್ನ ಇಬ್ಬರು ಶಿಷ್ಯರನ್ನು ಕರೆದು, ‘‘ನಿಮ್ಮ ಎದುರಿನಲ್ಲಿ ಇರುವ ಪಟ್ಟಣದೊಳಕ್ಕೆ ಹೋಗಿ. ನೀವು ಅದನ್ನು ಪ್ರವೇಶಿಸಿದಾಗ, ಅಲ್ಲೇ ಕಟ್ಟಿರುವ ಒಂದು ಕತ್ತೆಯನ್ನು ಕಾಣುತ್ತೀರಿ. ಆ ಕತ್ತೆಯ ಜೊತೆಯಲ್ಲಿ ಒಂದು ಕತ್ತೆಮರಿಯನ್ನು ಸಹ ನೀವು ಕಾಣುವಿರಿ. ಆ ಎರಡು ಕತ್ತೆಗಳನ್ನು ಬಿಚ್ಚಿ ಅವುಗಳನ್ನು ನನ್ನ ಬಳಿಗೆ ತನ್ನಿರಿ. 3ನೀವು ಏಕೆ ಕತ್ತೆಗಳನ್ನು ತೆಗೆದುಕೊಂಡು ಹೋಗುತ್ತಿದ್ದೀರಿ ಎಂದು

ನಿಮ್ಮನ್ನು ಯಾರಾದರೂ ಕೇಳಿದರೆ, 'ಈ ಕತ್ತೆಗಳು ಗುರುವಿಗೆ
ಬೇಕಾಗಿವೆ. ಆತನು ಅವುಗಳನ್ನು ಬೇಗನೆ ಹಿಂದಕ್ಕೆ ಕಳುಹಿಸು
ತ್ತಾನೆ ಎಂದು ಹೇಳಿರಿ''' ಎಂಬುದಾಗಿ ಹೇಳಿ ಕಳುಹಿಸಿದನು.
4ಪ್ರವಾದಿಯಾದ ಜೆಕರ್ಯನು ಹೇಳಿದ ಪ್ರವಾದನೆಯು
ಇದರಿಂದ ನೆರವೇರಿತು. ಅದೇನೆಂದರೆ:

> 5 ''ಸಿಯೋನ್ ನಗರಿಗೆ ಹೇಳಿರಿ. 'ನಿನ್ನ ರಾಜನು ಈಗ
> ನಿನ್ನ ಬಳಿಗೆ ಬರುತ್ತಿದ್ದಾನೆ. ದೀನತೆಯಿಂದ ಕತ್ತೆಯ
> ಮೇಲೆ ಬರುತ್ತಿದ್ದಾನೆ. ಹೌದು, ಪ್ರಾಯದ ಕತ್ತೆ
> ಮರಿಯ ಮೇಲೆ ಬರುತ್ತಿದ್ದಾನೆ.''
>
> *ಜೆಕರ್ಯ 9:9*

6ಆ ಶಿಷ್ಯರು ಹೋಗಿ, ಯೇಸು ಹೇಳಿದ್ದಂತೆಯೇ ತಾಯಿ
ಕತ್ತೆಯನ್ನೂ ಮತ್ತು ಅದರ ಮರಿಯನ್ನೂ ಯೇಸುವಿನ ಬಳಿಗೆ
ತಂದರು. 7ಅವರು ತಮ್ಮ ಮೇಲಂಗಿಗಳನ್ನು ಅವುಗಳ ಮೇಲೆ
ಹಾಕಿದರು. 8ಆಗ ಯೇಸು ಕುಳಿತುಕೊಂಡು ಜೆರುಸಲೇಮಿಗೆ
ಹೋದನು. ಅನೇಕ ಜನರು ತಮ್ಮ ಮೇಲಂಗಿಗಳನ್ನು ಯೇಸುವಿ
ಗಾಗಿ ದಾರಿಯ ಮೇಲೆ ಹಾಸಿದರು. ಕೆಲವರು ಮರಗಳಿಂದ
ಚಿಗುರುಗಳನ್ನು ಕತ್ತರಿಸಿಕೊಂಡು ಬಂದು ದಾರಿಯ ಮೇಲೆ
ಹರಡಿದರು. 9ಕೆಲವರು ಯೇಸುವಿನ ಮುಂದೆ ನಡೆದುಹೋಗು
ತ್ತಿದ್ದರು. ಕೆಲವರು ಯೇಸುವಿನ ಹಿಂದೆ ನಡೆದುಬರುತ್ತಿದ್ದರು.
ಜನರೆಲ್ಲರೂ ಹೀಗೆ ಆರ್ಭಟಿಸಿದರು:

> ''ದಾವೀದನ ಕುಮಾರನನ್ನು ಕೊಂಡಾಡಿರಿ! *
> ಪ್ರಭುವಿನ ಹೆಸರಿನಲ್ಲಿ ಬರುವವನನ್ನು ದೇವರು
> ಆಶೀರ್ವದಿಸಲಿ! ಪರಲೋಕದ ದೇವರನ್ನು
> ಕೊಂಡಾಡಿರಿ!''
>
> *ಕೀರ್ತನೆ 118:26*

10ಬಳಿಕ ಯೇಸು ಜೆರುಸಲೇಮಿನೊಳಗೆ ಹೋದನು.
ಪಟ್ಟಣದಲ್ಲಿದ್ದ ಜನರೆಲ್ಲ ಗಲಿಬಿಲಿಗೊಂಡರು. ಅವರು, ''ಈ
ಮನುಷ್ಯನು ಯಾರು'' ಎಂದು ಕೇಳಿದರು.
11ಯೇಸುವನ್ನು ಹಿಂಬಾಲಿಸುತ್ತಿದ್ದ ಅನೇಕ ಜನರು,
''ಈತನೇ ಯೇಸು. ಈತನು ಗಲಿಲಾಯ ಪ್ರಾಂತ್ಯದಲ್ಲಿರುವ
ನಜರೇತ್ ಎಂಬ ಊರಿನ ಪ್ರವಾದಿ'' ಎಂದು ಉತ್ತರ ಕೊಟ್ಟರು.

### ದೇವಾಲಯವು ಪ್ರಾರ್ಥನಾಲಯ

(ಮಾರ್ಕ 11:15-19; ಲೂಕ 19:45-48;
ಯೋಹಾನ 2:13-22)

12ಯೇಸು ದೇವಾಲಯದ ಒಳಕ್ಕೆ ಹೋದನು. ಅಲ್ಲಿ
ಮಾರುತ್ತಿದ್ದ ಮತ್ತು ಕೊಂಡುಕೊಳ್ಳುತ್ತಿದ್ದ ಜನರನ್ನೆಲ್ಲಾ ಆತನು
ಹೊರಗೆ ಓಡಿಸಿಬಿಟ್ಟನು; ನಾಣ್ಯ ವಿನಿಮಯ ಮಾಡುತ್ತಿದ್ದವರ
ಮತ್ತು ಪಾರಿವಾಳಗಳನ್ನು ಮಾರುತ್ತಿದ್ದವರ ಮೇಜುಗಳನ್ನು
ಕೆಡವಿದನು.
13ಯೇಸು ಅಲ್ಲಿದ್ದ ಜನರಿಗೆಲ್ಲ, ''ನನ್ನ ಆಲಯವು
ಪ್ರಾರ್ಥನಾಲಯ ಎನಿಸಿಕೊಳ್ಳುವುದು' * ಎಂದು ಪವಿತ್ರ
ಗ್ರಂಥದಲ್ಲಿ ಬರೆದಿದೆ. ಆದರೆ ನೀವು ದೇವರ ಆಲಯವನ್ನು
'ಕಳ್ಳರ ಗವಿಯನ್ನಾಗಿ ಮಾಡುತ್ತಿದ್ದೀರಿ''' * ಎಂದು ಹೇಳಿದನು.
14ಕೆಲವು ಮಂದಿ ಕುರುಡರು ಮತ್ತು ಕುಂಟರು
ದೇವಾಲಯದಲ್ಲಿ ಯೇಸುವಿನ ಬಳಿಗೆ ಬಂದರು. ಯೇಸು
ಅವರನ್ನು ಗುಣಪಡಿಸಿದನು. 15ಮಹಾಯಾಜಕರು ಮತ್ತು
ಧರ್ಮೋಪದೇಶಕರು ಇದನ್ನು ನೋಡಿದರು. ಯೇಸು
ಮಹತ್ಕಾರ್ಯಗಳನ್ನು ಮಾಡುತ್ತಿರುವುದನ್ನು ಮತ್ತು
ದೇವಾಲಯದಲ್ಲಿ ಚಿಕ್ಕಮಕ್ಕಳು ಯೇಸುವನ್ನು ಕೊಂಡಾಡು
ತ್ತಿರುವುದನ್ನು ಅವರು ಗಮನಿಸಿದರು. ಚಿಕ್ಕ ಮಕ್ಕಳು,
''ದಾವೀದನ ಕುಮಾರನಿಗೆ ಸ್ತೋತ್ರವಾಗಲಿ'' ಎಂದು ಕೂಗು
ತ್ತಿದ್ದರು. ಇವುಗಳಿಂದಾಗಿ ಯಾಜಕರು ಮತ್ತು ಧರ್ಮೋಪ
ದೇಶಕರು ಕೋಪಗೊಂಡರು.
16ಮಹಾಯಾಜಕರು ಮತ್ತು ಧರ್ಮೋಪದೇಶಕರು
ಯೇಸುವಿಗೆ, ''ಈ ಚಿಕ್ಕಮಕ್ಕಳು ಹೇಳುತ್ತಿರುವ ಮಾತುಗಳನ್ನು
ನೀನು ಕೇಳಿಸಿಕೊಂಡೆಯೋ?'' ಎಂದು ಕೇಳಿದರು. ಯೇಸು,
''ಹೌದು, 'ನೀನು ಚಿಕ್ಕಮಕ್ಕಳಿಗೂ ಎಳೆಯ ಕೂಸುಗಳಿಗೂ
ಸ್ತೋತ್ರಮಾಡಲು ಕಲಿಸಿರುವೆ* ಎಂದು ಪವಿತ್ರ ಗ್ರಂಥದಲ್ಲಿ
ಹೇಳಿದೆ. ನೀವು ಪವಿತ್ರ ಗ್ರಂಥವನ್ನು ಓದಿಲ್ಲವೇ?'' ಎಂದು
ಉತ್ತರ ಕೊಟ್ಟನು.
17ಬಳಿಕ ಆತನು ಆ ಸ್ಥಳವನ್ನು ಬಿಟ್ಟು ಬೆಥಾನಿ ಪಟ್ಟಣಕ್ಕೆ
ಹೊರಟು ಹೋದನು. ಯೇಸು ಆ ರಾತ್ರಿ ಅಲ್ಲಿಯೇ ತಂಗಿದನು.

### ನಂಬಿಕೆಗಿರುವ ಶಕ್ತಿ

(ಮಾರ್ಕ 11:12-14; 20-24)

18ಮರುದಿನ ಮುಂಜಾನೆ ಯೇಸು ಪಟ್ಟಣಕ್ಕೆ ಹಿಂತಿರುಗಿ
ಹೋಗುತ್ತಿದ್ದನು. ಆತನಿಗೆ ಹಸಿವಾಯಿತು. 19ಆತನು ದಾರಿಯ
ಪಕ್ಕದಲ್ಲಿದ್ದ ಒಂದು ಅಂಜೂರದ ಮರವನ್ನು ನೋಡಿ ಹಣ್ಣನ್ನು
ತಿನ್ನಲು ಅದರ ಬಳಿಗೆ ಹೋದನು. ಆದರೆ ಮರದಲ್ಲಿ ಬರೀ
ಎಲೆಗಳೇ ಇದ್ದವು. ಆದ್ದರಿಂದ ಯೇಸು ಆ ಮರಕ್ಕೆ, ''ಇನ್ನು
ಮೇಲೆ ನೀನೆಂದಿಗೂ ಹಣ್ಣುಬಿಡದಂತಾಗಲಿ!'' ಎಂದನು. ಆ
ಕೂಡಲೇ ಅಂಜೂರದ ಮರ ಒಣಗಿಹೋಯಿತು.
20ಶಿಷ್ಯರು ಇದನ್ನು ನೋಡಿ ಬಹಳ ಆಶ್ಚರ್ಯಪಟ್ಟು, ''ಈ
ಅಂಜೂರದ ಮರವು ಅಷ್ಟು ಬೇಗನೆ ಹೇಗೆ ಒಣಗಿ
ಹೋಯಿತು?'' ಎಂದು ಕೇಳಿದರು. 21ಯೇಸು, ''ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ಸಂಶಯಪಡದೆ
ನಂಬಿದರೆ ನಾನು ಈ ಮರಕ್ಕೆ ಮಾಡಿದಂತೆ ನೀವೂ ಮಾಡಲು
ಸಾಧ್ಯ. ಅಲ್ಲದೆ ಇನ್ನೂ ಹೆಚ್ಚಾಗಿ ಮಾಡಲು ಸಾಧ್ಯ. ನೀವು ಈ
ಬೆಟ್ಟಕ್ಕೆ, 'ನೀನು ಹೋಗಿ ಸಮುದ್ರದಲ್ಲಿ ಬೀಳು' ಎಂದು ಪೂರ್ಣ
ನಂಬಿಕೆಯಿಂದ ಹೇಳಿದರೆ ಅಂತೆಯೇ ಸಂಭವಿಸುವುದು.
22ನೀವು ನಂಬಿ, ಪ್ರಾರ್ಥನೆಯಲ್ಲಿ ಏನನ್ನೇ ಕೇಳಿದರೂ ನಿಮಗೆ
ಅದು ದೊರೆಯುವುದು'' ಎಂದು ಉತ್ತರ ಕೊಟ್ಟನು.

---

**ಕೊಂಡಾಡಿರಿ** ಮೂಲಗ್ರಂಥದಲ್ಲಿ ''ಹೊಸನ್ನ' ಎಂಬ ಹೀಬ್ರೂ ಪದವನ್ನು ಬಳಸಲಾಗಿದೆ. ಈ ಪದದ ಅರ್ಥ ''ರಕ್ಷಿಸು.'' ಇದನ್ನು ''ಕೊಂಡಾಡಿರಿ'' ಎಂಬರ್ಥದಲ್ಲಿ ಬಳಸಲಾಗಿದೆ.

**ನನ್ನ ... ಎನಿಸಿಕೊಳ್ಳುವುದು** ಯೆಶಾಯ 56:7

**ಕಳ್ಳರ ... ಮಾಡುತ್ತಿದ್ದೀರಿ** ಯೆರೆಮೀಯ 7:11

**ನೀನು ... ಕಲಿಸಿರುವೆ** ಕೀರ್ತನೆ 8:2

### ಯೇಸುವಿನ ಅಧಿಕಾರದ ಬಗ್ಗೆ ಯೆಹೂದ್ಯನಾಯಕರ ಸಂದೇಹ
(ಮಾರ್ಕ 11:27-33; ಲೂಕ 20:1-8)

23ಯೇಸು ದೇವಾಲಯಕ್ಕೆ ಹೋದನು. ಯೇಸು ಅಲ್ಲಿ
ಉಪದೇಶಿಸುತ್ತಿದ್ದಾಗ, ಮಹಾಯಾಜಕರು ಮತ್ತು ಜನರ
ಹಿರಿಯ ನಾಯಕರು ಯೇಸುವಿನ ಬಳಿಗೆ ಬಂದರು. ಅವರು
ಯೇಸುವಿಗೆ, ‘‘ನೀನು ಇವುಗಳನ್ನು ಯಾವ ಅಧಿಕಾರದಿಂದ
ಮಾಡುತ್ತಿರುವೆ? ಈ ಅಧಿಕಾರವನ್ನು ನಿನಗೆ ಕೊಟ್ಟವರು
ಯಾರು? ನಮಗೆ ತಿಳಿಸು!’’ ಎಂದರು.
24ಯೇಸು, ‘‘ನಾನೂ ನಿಮಗೊಂದು ಪ್ರಶ್ನೆಯನ್ನು
ಕೇಳುತ್ತೇನೆ. ನೀವು ನನಗೆ ಉತ್ತರ ಕೊಟ್ಟರೆ, ಇವುಗಳನ್ನು ಯಾವ
ಅಧಿಕಾರದಿಂದ ಮಾಡುತ್ತಿದ್ದೇನೆಂದು ನಿಮಗೆ ತಿಳಿಸುತ್ತೇನೆ.
25ದೀಕ್ಷಾಸ್ನಾನ ಕೊಡುವ ಅಧಿಕಾರ ಯೋಹಾನನಿಗೆ ದೇವರಿಂದ
ಬಂದಿತೋ ಇಲ್ಲವೆ ಮನುಷ್ಯನಿಂದ ಬಂದಿತೋ? ನನಗೆ
ಹೇಳಿ!’’ ಎಂದು ಉತ್ತರ ಕೊಟ್ಟನು.

ಯಾಜಕರು ಮತ್ತು ಯೆಹೂದ್ಯ ನಾಯಕರು ಯೇಸುವಿನ
ಪ್ರಶ್ನೆಯನ್ನು ಕುರಿತು ತಮ್ಮೊಳಗೆ, ‘‘ಯೋಹಾನನು ಕೊಟ್ಟ
ದೀಕ್ಷಾಸ್ನಾನವು ದೇವರಿಂದ ಬಂದಿತು’ ಎಂದರೆ, 'ಹಾಗಾದರೆ
ಯೋಹಾನನನ್ನು ನೀವು ಏಕೆ ನಂಬಲಿಲ್ಲ?’ ಎಂದು ಕೇಳುವನು.
26‘ಅದು ಮನುಷ್ಯನಿಂದ ಬಂದಿತು ’ ಎಂದರೆ ಜನರೆಲ್ಲರೂ ನಮ್ಮ
ಮೇಲೆ ಕೋಪಗೊಳ್ಳುವರು. ಅವರೆಲ್ಲರೂ ಯೋಹಾನನನ್ನು
ಒಬ್ಬ ಪ್ರವಾದಿ ಎಂದು ನಂಬಿರುವುದರಿಂದ ನಾವು ಅವರಿಗೆ
ಹೆದರಬೇಕಾಗಿದೆ ’’ ಎಂದು ಮಾತಾಡಿಕೊಂಡರು.
27ಬಳಿಕ ಅವರು, ‘‘ಯೋಹಾನನಿಗೆ ಎಲ್ಲಿಂದ ಅಧಿಕಾರ
ಬಂತೋ ನಮಗೆ ಗೊತ್ತಿಲ್ಲ ’’ ಎಂದು ಉತ್ತರಕೊಟ್ಟರು.

ಆಗ ಯೇಸು, ‘‘ಇವುಗಳನ್ನು ಯಾವ ಅಧಿಕಾರದಿಂದ
ಮಾಡುತ್ತಿದ್ದೇನೆ ಎಂಬುದನ್ನು ನಾನು ಸಹ ನಿಮಗೆ
ಹೇಳುವುದಿಲ್ಲ’’ ಎಂದನು.

### ಇಬ್ಬರು ಗಂಡು ಮಕ್ಕಳನ್ನು ಕುರಿತು ಯೇಸು ಹೇಳಿದ ಸಾಮ್ಯ

28ಒಬ್ಬ ಮನುಷ್ಯನಿಗೆ ಇಬ್ಬರು ಗಂಡುಮಕ್ಕಳಿದ್ದರು. ಆ
ಮನುಷ್ಯನು ಮೊದಲನೆಯ ಮಗನ ಬಳಿಗೆ ಹೋಗಿ, ‘‘ಮಗನೇ
ಈ ದಿನ ನೀನು ಹೋಗಿ, ನನ್ನ ದ್ರಾಕ್ಷಿತೋಟದಲ್ಲಿ ಕೆಲಸ
ಮಾಡು’’ ಎಂದು ಹೇಳಿದನು.
29ಅದಕ್ಕೆ ಮಗನು, ‘‘ನಾನು ಹೋಗುವುದಿಲ್ಲ’’ ಎಂದನು.
ಆದರೆ ಆ ಬಳಿಕ ತನ್ನ ಮನಸ್ಸನ್ನು ಬದಲಾಯಿಸಿಕೊಂಡು ಕೆಲಸಕ್ಕೆ
ಹೋದನು.
30ತಂದೆಯು ಇನ್ನೊಬ್ಬ ಮಗನ ಬಳಿಗೆ ಹೋಗಿ, ‘‘ಮಗನೇ,
ಈ ದಿನ ನೀನು ದ್ರಾಕ್ಷಿತೋಟಕ್ಕೆ ಹೋಗಿ ಕೆಲಸ ಮಾಡು’’
ಎಂದನು. ಮಗನು, ‘‘ಆಗಲಿಯಪ್ಪಾ,ನಾನು ಹೋಗಿ ಕೆಲಸ
ಮಾಡುತ್ತೇನೆ’’ ಎಂದನು. ಆದರೆ ಆ ಮಗನು ಹೋಗಲೇ ಇಲ್ಲ.
31‘‘ಈ ಇಬ್ಬರು ಗಂಡುಮಕ್ಕಳಲ್ಲಿ ತಂದೆಗೆ ಯಾರು
ವಿಧೇಯರಾದರು?’’

ಆಗ ಯೆಹೂದ್ಯ ನಾಯಕರು,‘‘ಮೊದಲನೆಯ ಮಗ’’
ಎಂದು ಉತ್ತರ ಕೊಟ್ಟರು.

ಯೇಸು ಅವರಿಗೆ, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಸುಂಕ ವಸೂಲಿಗಾರರನ್ನು ಮತ್ತು ವೇಶ್ಯೆಯರನ್ನು
ಕೆಟ್ಟಜನರೆಂದು ನೀವು ಯೋಚಿಸುತ್ತೀರಿ. ಆದರೆ ಅವರು
ನಿಮಗಿಂತ ಮುಂಚೆಯೇ ದೇವರ ರಾಜ್ಯಕ್ಕೆ ಪ್ರವೇಶಿಸುತ್ತಾರೆ.
32ನೀವು ಜೀವಿಸತಕ್ಕ ಸರಿಯಾದ ಮಾರ್ಗವನ್ನು ತೋರಿಸಲು
ಯೋಹಾನನು ಬಂದನು. ನೀವು ಯೋಹಾನನನ್ನು ನಂಬಲಿಲ್ಲ,
ಆದರೆ ಸುಂಕ ವಸೂಲಿಗಾರರು ಮತ್ತು ವೇಶ್ಯೆಯರು ನಂಬಿದ್ದನ್ನು
ನೀವು ನೋಡಿದ್ದೀರಿ. ಆದರೆ ನೀವಿನ್ನೂ ಬದಲಾವಣೆ
ಹೊಂದಲು ಮತ್ತು ಅವನನ್ನು ನಂಬಲು ಇಷ್ಟಪಡುತ್ತಿಲ್ಲ.

### ದೇವರ ಸ್ವಂತ ಮಗನ ಆಗಮನ
(ಮಾರ್ಕ 12:1-12; ಲೂಕ 20:9-19)

33‘‘ಈ ಸಾಮ್ಯವನ್ನು ಕೇಳಿರಿ : ಒಬ್ಬ ಮನುಷ್ಯನಿಗೆ ಒಂದು
ಸ್ವಂತ ತೋಟವಿತ್ತು. ಅವನು ತೋಟದಲ್ಲಿ ದ್ರಾಕ್ಷಿಯನ್ನು
ಬೆಳೆಸಿದನು; ತೋಟದ ಸುತ್ತಲೂ ಗೋಡೆ ಕಟ್ಟಿ ದ್ರಾಕ್ಷಾರಸ
ತಯಾರಿಸಲು ಆಲೆಯನ್ನು ಹೂಡಿಸಿದನು; ಕಾವಲಿಗಾಗಿ ಅಟ್ಟಣೆ
ಯನ್ನೂ ಕಟ್ಟಿಸಿದನು. ಅವನು ಆ ತೋಟವನ್ನು ಕೆಲವು ರೈತರಿಗೆ
ಗುತ್ತಿಗೆಗೆ ಕೊಟ್ಟು ವಿದೇಶಕ್ಕೆ ಹೊರಟುಹೋದನು. 34ದ್ರಾಕ್ಷಿ
ಹಣ್ಣನ್ನು ಕೀಳುವ ಸಮಯ ಬಂದಾಗ ತನ್ನ ಪಾಲನ್ನು ತೆಗೆದು
ಕೊಂಡು ಬರಲು ಸೇವಕರನ್ನು ರೈತರ ಬಳಿಗೆ ಕಳುಹಿಸಿದನು.
35ಆದರೆ ರೈತರು ಆ ಸೇವಕರನ್ನು ಹಿಡಿದುಕೊಂಡು ಒಬ್ಬನನ್ನು
ಹೊಡೆದರು ; ಬೇರೊಬ್ಬನನ್ನು ಕತ್ತರಿಸಿ ಹಾಕಿದರು; ಮೂರನೇ
ಸೇವಕನನ್ನು ಕಲ್ಲೆಸೆದು ಕೊಂದರು. 36ಆದ್ದರಿಂದ ಅವನು
ಮೊದಲನೆ ಸಲ ಕಳುಹಿಸಿದ ಸೇವಕರಿಗಿಂತಲೂ ಹೆಚ್ಚು ಸೇವಕ
ರನ್ನು ರೈತರ ಬಳಿಗೆ ಕಳುಹಿಸಿದನು. ಆದರೆ ರೈತರು ಮೊದಲನೆ
ಸಲ ಮಾಡಿದಂತೆಯೇ ಈ ಸೇವಕರಿಗೂ ಮಾಡಿದರು. 37ಆಗ
ಅವನು, ‘ರೈತರು ನನ್ನ ಮಗನನ್ನು ಗೌರವಿಸುವರು’ ಎಂದು
ಕೊಂಡು ತನ್ನ ಮಗನನ್ನೇ ಕಳುಹಿಸಿದನು. 38‘‘ಆದರೆ ರೈತರು
ಮಗನನ್ನು ನೋಡಿದಾಗ, ‘ಇವನು ತೋಟದ ಒಡೆಯನ
ಮಗನು. ಈ ತೋಟ ಇವನದಾಗುವುದು. ನಾವು ಇವನನ್ನು
ಕೊಂದರೆ, ಈ ತೋಟ ನಮ್ಮದಾಗುವುದು’ ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು. 39ಆದ್ದರಿಂದ ರೈತರು ಮಗ
ನನ್ನು ಹಿಡಿದು ತೋಟದಿಂದ ಹೊರಕ್ಕೆಸೆದು ಅವನನ್ನು ಕೊಂದು
ಹಾಕಿದರು. 40‘‘ಹೀಗಿರಲು ತೋಟದ ಯಜಮಾನನು ತಾನೇ
ಬಂದಾಗ ಈ ರೈತರಿಗೆ ಏನು ಮಾಡುತ್ತಾನೆ?’’
41ಯೆಹೂದ್ಯ ಯಾಜಕರು ಮತ್ತು ನಾಯಕರು, ‘‘ಅವನು
ಖಂಡಿತವಾಗಿ ಆ ದುಷ್ಟಜನರನ್ನು ಕೊಂದು ಸುಗ್ಗಿಕಾಲದಲ್ಲಿ ತನ್ನ
ಪಾಲನ್ನು ತನಗೆ ಕೊಡುವ ರೈತರಿಗೆ ಅದನ್ನು ಗುತ್ತಿಗೆಗೆ
ಕೊಡುತ್ತಾನೆ’’ಎಂದು ಹೇಳಿದರು.
42ಯೇಸು ಅವರಿಗೆ, ‘‘ಖಂಡಿತವಾಗಿಯೂ ನೀವು ಇದನ್ನು
ಪವಿತ್ರ ಗ್ರಂಥದಲ್ಲಿ ಓದಿದ್ದೀರಿ :

> ‘ಮನೆ ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ
> ಮೂಲೆಗಲ್ಲಾಯಿತು. ಪ್ರಭುವು ಇದನ್ನು
> ಮಾಡಿದನು. ಇದು ನಮಗೆ ಆಶ್ಚರ್ಯ
> ಕರವಾಗಿದೆ.’
>
> *ಕೀರ್ತನೆ 118:22,23*

43‘‘ಆದ್ದರಿಂದ ನಾನು ನಿಮಗೆ ಹೇಳುವುದೇನಂದರೆ, ದೇವರ
ರಾಜ್ಯವು ನಿಮ್ಮಿಂದ ತೆಗೆದುಹಾಕಲ್ಪಟ್ಟು ಆ ರಾಜ್ಯದಲ್ಲಿ ದೇವರ

ಇಷ್ಟಕ್ಕನುಸಾರವಾದ ಕಾರ್ಯಗಳನ್ನು ಮಾಡುವವರಿಗೆ ಕೊಡಲ್ಪಡುವುದು. 44ಈ ಕಲ್ಲಿನ ಮೇಲೆ ಬೀಳುವ ಮನುಷ್ಯನು ತುಂಡುತುಂಡಾಗುತ್ತಾನೆ. ಈ ಕಲ್ಲು ಮನುಷ್ಯನ ಮೇಲೆ ಬಿದ್ದರೆ, ಅವನು ಜಜ್ಜಿಹೋಗುವನು.'' *

45ಮಹಾಯಾಜಕರು ಮತ್ತು ಫರಿಸಾಯರು ಯೇಸು ಹೇಳಿದ ಈ ಸಾಮ್ಯಗಳನ್ನು ಕೇಳಿ, ತಮ್ಮನ್ನೇ ಕುರಿತು ಇವುಗಳನ್ನು ಹೇಳಿದನೆಂದು ತಿಳಿದುಕೊಂಡರು. 46ಅವರು ಯೇಸುವನ್ನು ಬಂಧಿಸಲು ಉಪಾಯ ಹುಡುಕಿದರೂ ಜನರಿಗೆ ಭಯಪಟ್ಟು ಬಂಧಿಸಲಿಲ್ಲ. ಏಕೆಂದರೆ ಯೇಸು ಒಬ್ಬ ಪ್ರವಾದಿ ಎಂದು ಜನರು ನಂಬಿದ್ದರು.

### ಊಟಕ್ಕೆ ಆಹ್ವಾನಿಸಲ್ಪಟ್ಟಿದ್ದ ಜನರ ಕುರಿತಾದ ಸಾಮ್ಯ

(ಲೂಕ 14:15-24)

22 ಯೇಸು ಬೇರೆ ಕೆಲವು ವಿಷಯಗಳನ್ನು ಸಾಮ್ಯಗಳ ಮೂಲಕವಾಗಿ ಜನರಿಗೆ ತಿಳಿಸಿದನು: 2''ಪರಲೋಕ ರಾಜ್ಯವು ತನ್ನ ಮಗನ ಮದುವೆಯನ್ನು ಸಿದ್ಧಪಡಿಸಿದ ಒಬ್ಬ ರಾಜನಿಗೆ ಹೋಲಿಕೆಯಾಗಿದೆ. 3ಆ ರಾಜನು ಕೆಲವು ಜನರನ್ನು ಔತಣಕ್ಕೆ ಆಹ್ವಾನಿಸಿದನು. ಅಡಿಗೆ ಸಿದ್ಧವಾದ ಬಳಿಕ ರಾಜನು ತನ್ನ ಸೇವಕರ ಮೂಲಕ ಆ ಜನರಿಗೆ ತಿಳಿಸಿದನು. ಆದರೆ ಅವರು ಔತಣಕ್ಕೆ ಬರಲಿಲ್ಲ. 4ಆಮೇಲೆ ರಾಜನು ಇನ್ನೂ ಕೆಲವು ಸೇವಕರನ್ನು ಕರೆದು, 'ಈ ಜನರನ್ನು ನಾನು ಆಗಲೇ ಆಹ್ವಾನಿಸಿದ್ದೇನೆ. ಆದ್ದರಿಂದ ಈಗ ಔತಣವು ಸಿದ್ಧವಾಗಿದೆ. ಅಡಿಗೆಗಾಗಿ ಕೊಬ್ಬಿದ ಎತ್ತುಗಳನ್ನು ಮತ್ತು ಕರುಗಳನ್ನು ಕೊಯ್ಸಿದ್ದೇನೆ. ಎಲ್ಲವೂ ಸಿದ್ಧವಾಗಿದೆ. ಮದುವೆ ಔತಣಕ್ಕೆ ಬನ್ನಿ ಎಂದು ಅವರಿಗೆ ತಿಳಿಸಿ' ಎಂದು ಹೇಳಿ ಕಳುಹಿಸಿದನು.

5''ಅಂತೆಯೇ ಸೇವಕರು ಹೋಗಿ ಆ ಜನರಿಗೆ ತಿಳಿಸಿದರು. ಆದರೆ ಅವರು ಸೇವಕರ ಮಾತಿಗೆ ಕಿವಿಗೊಡಲಿಲ್ಲ. ಒಬ್ಬನು ತನ್ನ ಹೊಲದಲ್ಲಿ ಕೆಲಸ ಮಾಡಲು ಹೊರಟುಹೋದನು. ಬೇರೊಬ್ಬನು ತನ್ನ ವ್ಯಾಪಾರಕ್ಕಾಗಿ ಹೊರಟುಹೋದನು. 6ಇನ್ನು ಕೆಲವರು ಆ ಸೇವಕರನ್ನು ಹಿಡಿದು, ಹೊಡೆದು ಕೊಂದು ಹಾಕಿದರು. 7ಆಗ ರಾಜನು ಬಹು ಕೋಪಗೊಂಡು ತನ್ನ ಸೈನ್ಯವನ್ನು ಕಳುಹಿಸಿ ಆ ಕೊಲೆಗಾರರನ್ನು ಕೊಲ್ಲಿಸಿದನು ಮತ್ತು ಅವರ ಪಟ್ಟಣವನ್ನು ಸುಟ್ಟುಹಾಕಿಸಿದನು.

8''ಬಳಿಕ ರಾಜನು ತನ್ನ ಸೇವಕರಿಗೆ, ಮದುವೆ ಊಟ ಸಿದ್ಧವಾಗಿದೆ. ನಾನು ಆಹ್ವಾನಿಸಿದ್ದ ಜನರು ಊಟಕ್ಕೆ ಬರುವಷ್ಟು ಒಳ್ಳೆಯವರಾಗಿರಲಿಲ್ಲ. 9ಆದ್ದರಿಂದ ಬೀದಿಯ ಮೂಲೆಮೂಲೆಗಳಿಗೆ ಹೋಗಿ ನೀವು ಕಂಡ ಜನರನ್ನೆಲ್ಲ ಔತಣಕ್ಕೆ ಆಹ್ವಾನಿಸಿರಿ ಎಂದನು. 10ಅಂತೆಯೇ ಸೇವಕರು ಬೀದಿಬೀದಿಗಳಿಗೆ ಹೋಗಿ ತಾವು ಕಂಡ ಜನರನ್ನೆಲ್ಲಾ ಒಳ್ಳೆಯವರು, ಕೆಟ್ಟವರು ಎನ್ನದೆ ಒಟ್ಟುಗೂಡಿಸಿ ಊಟ ಸಿದ್ಧವಾಗಿದ್ದ ಸ್ಥಳಕ್ಕೆ ಕರೆತಂದರು. ಆ ಸ್ಥಳವು ಜನರಿಂದ ತುಂಬಿಹೋಯಿತು.

11''ಆಗ ರಾಜನು ಜನರನ್ನೆಲ್ಲ ನೋಡಲು ಒಳಗೆ ಬಂದನು. ಮದುವೆಗೆ ಯೋಗ್ಯವಾದ ಬಟ್ಟೆಯನ್ನು ಧರಿಸಿಕೊಂಡಿಲ್ಲದ ಒಬ್ಬ ಮನುಷ್ಯನನ್ನು ರಾಜನು ಕಂಡು, ''12ಸ್ನೇಹಿತನೇ, ನೀನು ಒಳಗೆ ಹೇಗೆ ಬಂದೆ? ನೀನು ಮದುವೆಗೆ ಯೋಗ್ಯವಾದ ಬಟ್ಟೆಯನ್ನು ಧರಿಸಿಕೊಂಡಿಲ್ಲವಲ್ಲಾ' ಅಂದನು. ಆದರೆ ಅವನು ಉತ್ತರ ನೀಡಲಿಲ್ಲ. 13ಆಗ ರಾಜನು ಕೆಲವು ಸೇವಕರಿಗೆ, 'ಇವನ ಕೈಕಾಲು ಕಟ್ಟಿ ಹೊರಗೆ ಕತ್ತಲೆಯೊಳಕ್ಕೆ ಎಸೆಯಿರಿ' ಅಂದನು. ಆ ಸ್ಥಳದಲ್ಲಿ ಜನರು ಗೋಳಾಡುತ್ತಾ ಬಾಧೆಯಿಂದ ತಮ್ಮ ಹಲ್ಲುಗಳನ್ನು ಕಡಿಯುವರು.

14''ಹೌದು, ಆಹ್ವಾನಿಸಲ್ಪಟ್ಟವರು ಅನೇಕರಾದರೂ ಆರಿಸಲ್ಪಟ್ಟವರು ಕೆಲವರು ಮಾತ್ರ.''

### ಯೇಸುವನ್ನು ವಂಚಿಸಲು ಕೆಲವು ಯೆಹೂದ್ಯ ನಾಯಕರ ಪ್ರಯತ್ನ

(ಮಾರ್ಕ 12:13-17; ಲೂಕ 20:20-26)

15ಆಗ ಫರಿಸಾಯರು, ಅಲ್ಲಿಂದ ಹೊರಟು ಹೋಗಿ ಯೇಸುವಿನ ಮಾತಿನಲ್ಲಿ ತಪ್ಪು ಕಂಡುಹಿಡಿಯಲು ಉಪಾಯಗಳನ್ನು ಮಾಡಿಕೊಂಡರು. 16ಫರಿಸಾಯರು ಯೇಸುವನ್ನು ವಂಚಿಸುವುದಕ್ಕೆ ಕೆಲವರನ್ನು ಕಳುಹಿಸಿದರು. ಅವರಲ್ಲಿ ಕೆಲವರು ಫರಿಸಾಯರ ಹಿಂಬಾಲಕರಾಗಿದ್ದರು. ಇನ್ನು ಕೆಲವರು ಯೆಹೂದ್ಯರ ರಾಜಕೀಯ ಪಂಗಡಕ್ಕೆ ಸೇರಿದವರಾಗಿದ್ದರು. ಈ ಜನರು, ''ಬೋಧಕನೇ, ನೀನು ಯಥಾರ್ಥವಂತನೆಂದು ನಾವು ಬಲ್ಲೆವು. ನೀನು ದೇವರ ಮಾರ್ಗದ ಕುರಿತು ಸತ್ಯವನ್ನೇ ಬೋಧಿಸುವೆ ಎಂಬುದು ನಮಗೆ ಗೊತ್ತಿದೆ. ಬೇರೆಯವರು ನಿನ್ನ ವಿಷಯವಾಗಿ ಏನೇ ಯೋಚಿಸಿದರೂ ನೀನು ಹೆದರುವುದಿಲ್ಲ. ನೀನು ಮುಖದಾಕ್ಷಿಣ್ಯ ಮಾಡುವುದಿಲ್ಲ. 17ಆದ್ದರಿಂದ ನಿನ್ನ ಅಭಿಪ್ರಾಯವನ್ನು ತಿಳಿಸು. ಸೀಸರನಿಗೆ ತೆರಿಗೆ ಕೊಡುವದು ಸರಿಯೋ ಅಥವಾ ತಪ್ಪೋ?'' ಎಂದು ಕೇಳಿದರು.

18ಈ ಜನರ ಕುತಂತ್ರವು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಆತನು, ''ನೀವು ಕಪಟಿಗಳು! ನನ್ನನ್ನು ತಪ್ಪಿನಲ್ಲಿ ಸಿಕ್ಕಿಸಲು ಏಕೆ ಪ್ರಯತ್ನಿಸುತ್ತೀರಿ? 19ತೆರಿಗೆಗಾಗಿ ಕೊಡುವ ಒಂದು ನಾಣ್ಯವನ್ನು ನನಗೆ ತೋರಿಸಿರಿ'' ಎಂದನು. ಜನರು ಒಂದು ಬೆಳ್ಳಿಯ ನಾಣ್ಯವನ್ನು ಆತನಿಗೆ ತೋರಿಸಿದರು. 20ಆಗ ಆತನು ''ನಾಣ್ಯದ ಮೇಲೆ ಯಾರ ಮುಖಚಿತ್ರವಿದೆ ಮತ್ತು ಯಾರ ಹೆಸರಿದೆ?'' ಎಂದು ಕೇಳಿದನು.

21ಜನರು, ''ಅದು ಸೀಸರನ ಮುಖಚಿತ್ರ ಮತ್ತು ಹೆಸರು'' ಎಂದು ಉತ್ತರ ಕೊಟ್ಟರು.

ಆಗ ಯೇಸು ಅವರಿಗೆ, ''ಸೀಸರನದನ್ನು ಸೀಸರನಿಗೆ ಕೊಡಿರಿ; ದೇವರದನ್ನು ದೇವರಿಗೆ ಕೊಡಿರಿ'' ಅಂದನು.

22ಯೇಸು ಹೇಳಿದ್ದನ್ನು ಕೇಳಿದ ಆ ಜನರು ಆಶ್ಚರ್ಯಚಕಿತರಾಗಿ ಅಲ್ಲಿಂದ ಹೊರಟುಹೋದರು.

### ಯೇಸುವನ್ನು ವಂಚಿಸಲು ಕೆಲವು ಸದ್ದುಕಾಯರ ಪ್ರಯತ್ನ

(ಮಾರ್ಕ 12:18-27; ಲೂಕ 20:27-40)

23ಅದೇ ದಿನದಲ್ಲಿ ಕೆಲವು ಸದ್ದುಕಾಯರು ಯೇಸುವಿನ ಬಳಿಗೆ ಬಂದು, (ಯಾರಿಗೂ ಪುನರುತ್ಥಾನವಿಲ್ಲ ಎಂಬುದು ಸದ್ದುಕಾಯರ ನಂಬಿಕೆ.) 24''ಬೋಧಕನೇ, ವಿವಾಹಿತನೊಬ್ಬನು ಮಕ್ಕಳನ್ನು ಪಡೆಯದೆ ಸತ್ತರೆ, ಅವನ ಹೆಂಡತಿಯನ್ನು ಅವನ ತಮ್ಮನು ಮದುವೆ ಮಾಡಿಕೊಂಡು ಅಣ್ಣನಿಗಾಗಿ ಸಂತಾನ ಪಡೆಯಬೇಕೆಂದು * ಮೋಶೆ ಹೇಳಿದ್ದಾನೆ. 25ನಮ್ಮಲ್ಲಿ ಏಳು

---

**ವಚನ 44** ಕೆಲವು ಗ್ರೀಕ್ ಪ್ರತಿಗಳಲ್ಲಿ ಈ ವಚನವಿಲ್ಲ.

**ಬೋಧಕನೇ … ಪಡೆಯಬೇಕೆಂದು** ಧರ್ಮೋಪದೇಶ. 25:5; ಆದಿಕಾಂಡ 38:8.

ಮಂದಿ ಸಹೋದರರಿದ್ದರು. ಮೊದಲನೆಯವನು ಮದುವೆ
ಯಾಗಿ ಸತ್ತನು. ಅವನಿಗೆ ಮಕ್ಕಳಿರಲಿಲ್ಲ. ಆದ್ದರಿಂದ ಅವನ
ಸಹೋದರನು ಅವನ ಹೆಂಡತಿಯನ್ನು ಮದುವೆಯಾದನು.
26ಬಳಿಕ ಎರಡನೆಯ ಸಹೋದರನೂ ಸತ್ತನು. ಹೀಗೆಯೇ
ಮೂರನೆಯ ಸಹೋದರನಿಗೂ ಮತ್ತು ಉಳಿದೆಲ್ಲ ಸಹೋದರ
ರಿಗೂ ಆಯಿತು. 27ಕಡೆಯಲ್ಲಿ ಆ ಹೆಂಗಸೂ ಸತ್ತಳು. 28ಆದರೆ
ಏಳು ಮಂದಿಯೂ ಅವಳನ್ನು ಮದುವೆ ಆಗಿದ್ದರು. ಹೀಗಿರಲಾಗಿ
ಅವರು ಮರಣದಿಂದ ಮೇಲೇಳುವಾಗ ಅವಳು ಯಾರ
ಹೆಂಡತಿಯಾಗಿರುವಳು?'' ಎಂದು ಕೇಳಿದರು.

29ಯೇಸು, ''ನೀವು ತಪ್ಪಾಗಿ ತಿಳಿದುಕೊಂಡಿರಲು ಕಾರಣ
ವೇನಂದರೆ, ಪವಿತ್ರ ಗ್ರಂಥವು ಏನು ಹೇಳುತ್ತದೆ ಎಂಬುದು
ನಿಮಗೆ ತಿಳಿದಿಲ್ಲ ಮತ್ತು ದೇವರ ಶಕ್ತಿಯ ಬಗ್ಗೆಯೂ ನಿಮಗೆ
ಗೊತ್ತಿಲ್ಲ. 30ಸ್ತ್ರೀಯರು ಮತ್ತು ಪುರುಷರು ಪುನರುತ್ಥಾನ
ಹೊಂದಿದ ಮೇಲೆ ಮದುವೆ ಮಾಡಿಕೊಳ್ಳುವುದಿಲ್ಲ. ಅವ
ರೆಲ್ಲರೂ ಪರಲೋಕದ ದೇವದೂತರಂತೆ ಇರುತ್ತಾರೆ. 31ಸತ್ತ
ವರ ಪುನರುತ್ಥಾನದ ಕುರಿತು ದೇವರು, 32'ನಾನು ಅಬ್ರಹಾಮನ
ದೇವರು, ಇಸಾಕನ ದೇವರು ಮತ್ತು ಯಾಕೋಬನ
ದೇವರು' * ಎಂದು ಹೇಳಿರುವುದನ್ನು ನೀವು ಓದಿಲ್ಲವೇ?
ಹೀಗಿರುವಲ್ಲಿ, ದೇವರು ಜೀವಿತರಿಗೆ ಮಾತ್ರ ದೇವರೇ ಹೊರತು
ಸತ್ತವರಿಗಲ್ಲಾ'' ಅಂದನು.

33ಜನರೆಲ್ಲರೂ ಇದನ್ನು ಕೇಳಿ ಆತನ ಬೋಧನೆಗೆ
ಅತ್ಯಾಶ್ಚರ್ಯಪಟ್ಟರು.

### ಅತ್ಯಂತ ಪ್ರಮುಖ ಆಜ್ಞೆ ಯಾವುದು?
(ಮಾರ್ಕ 12:28-34; ಲೂಕ 10:25-28)

34ಸದ್ದುಕಾಯರು ಪ್ರತಿವಾದ ಮಾಡಲಾಗದ ರೀತಿಯಲ್ಲಿ
ಯೇಸು ಉತ್ತರಕೊಟ್ಟನೆಂಬುದು ಫರಿಸಾಯರಿಗೆ ತಿಳಿದು
ಅವರು ಒಟ್ಟಾಗಿ ಯೇಸುವಿನ ಬಳಿಗೆ ಬಂದರು. 35ಮೋಶೆಯ
ಧರ್ಮಶಾಸ್ತ್ರದಲ್ಲಿ ಪ್ರವೀಣನಾಗಿದ್ದ ಫರಿಸಾಯನೊಬ್ಬನು
ಯೇಸುವನ್ನು ಪರೀಕ್ಷಿಸಲು, 36''ಬೋಧಕನೇ, ಧರ್ಮಶಾಸ್ತ್ರ
ದಲ್ಲಿ ಅತ್ಯಂತ ಪ್ರಮುಖ ಆಜ್ಞೆ ಯಾವುದು?'' ಎಂದು ಕೇಳಿದನು.

37ಯೇಸು, '''ನಿನ್ನ ದೇವರಾಗಿರುವ ಪ್ರಭುವನ್ನು ಪ್ರೀತಿಸ
ಬೇಕು. ನೀನು ಆತನನ್ನು ನಿನ್ನ ಪೂರ್ಣ ಹೃದಯದಿಂದಲೂ ನಿನ್ನ
ಪೂರ್ಣ ಪ್ರಾಣದಿಂದಲೂ ನಿನ್ನ ಪೂರ್ಣ ಮನಸ್ಸಿನಿಂದಲೂ
ಪ್ರೀತಿಸಬೇಕು.' * 38ಇದೇ ಮೊದಲನೆಯ ಮತ್ತು ಅತ್ಯಂತ
ಪ್ರಮುಖವಾದ ಆಜ್ಞೆ. 39ಎರಡನೆಯ ಆಜ್ಞೆಯು ಮೊದಲನೆಯ
ಆಜ್ಞೆಯಷ್ಟೇ ಪ್ರಮುಖವಾಗಿದೆ. 'ನೀನು ನಿನ್ನನ್ನು ಪ್ರೀತಿಸು
ವಂತೆಯೇ ಬೇರೆಯವರನ್ನು ಪ್ರೀತಿಸಬೇಕು' * ಎಂಬುದೇ ಆ
ಆಜ್ಞೆ.

40ಇಡೀ ಧರ್ಮಶಾಸ್ತ್ರವು ಮತ್ತು ಪ್ರವಾದಿಗಳ ಎಲ್ಲಾ
ಗ್ರಂಥಗಳು ಈ ಎರಡು ಆಜ್ಞೆಗಳ ಅರ್ಥವನ್ನೇ ಒಳಗೊಂಡಿವೆ''
ಎಂದು ಉತ್ತರ ಕೊಟ್ಟನು.

### ಯೇಸು ಫರಿಸಾಯರಿಗೆ ಕೇಳಿದ ಪ್ರಶ್ನೆ
(ಮಾರ್ಕ 12:35-37; ಲೂಕ 20:41-44)

41ಫರಿಸಾಯರು ಒಟ್ಟಿಗೆ ಬಂದಿದ್ದಾಗ ಯೇಸು ಅವರಿಗೆ,
42''ಕ್ರಿಸ್ತನ ವಿಷಯವಾಗಿ ನಿಮ್ಮ ಆಲೋಚನೆಯೇನು? ಆತನು
ಯಾರ ಮಗನು?'' ಎಂದು ಅವರನ್ನು ಕೇಳಿದನು. ಫರಿಸಾ
ಯರು, ''ಕ್ರಿಸ್ತನು ದಾವೀದನ ಮಗನಾಗಿದ್ದಾನೆ'' ಎಂದು
ಉತ್ತರ ಕೊಟ್ಟರು.

43ಆಗ ಯೇಸುವು ಫರಿಸಾಯರಿಗೆ, ''ಹಾಗಾದರೆ
ದಾವೀದನು ಆತನನ್ನು 'ಪ್ರಭು' ಎಂದು ಏಕೆ ಕರೆದನು?
ದಾವೀದನು ಪರಿಶುದ್ಧಾತ್ಮನ ಶಕ್ತಿಯಿಂದ ಮಾತನಾಡಿದ್ದನು.
ದಾವೀದನು ಹೇಳಿದ್ದೇನೆಂದರೆ:

> 44'ಪ್ರಭು (ದೇವರು) ನನ್ನ ಪ್ರಭುವಿಗೆ (ಕ್ರಿಸ್ತನಿಗೆ),
> ನಾನು ನಿನ್ನ ವಿರೋಧಿಗಳನ್ನು ನಿನಗೆ ಪಾದ
> ಪೀಠವನ್ನಾಗಿ ಮಾಡುವತನಕ ನನ್ನ ಬಲಗಡೆ
> ಯಲ್ಲಿ ಕುಳಿತುಕೊಂಡಿರು' ಎಂದು ಹೇಳಿದ್ದಾನೆ.
> *ಕೀರ್ತನೆ 110:1*

45ದಾವೀದನು ಕ್ರಿಸ್ತನನ್ನು 'ಪ್ರಭು' ಎಂದು ಕರೆದಿದ್ದಾನೆ.
ಹೀಗಿರಲು ಆತನು ದಾವೀದನಿಗೆ ಮಗನಾಗಲು ಹೇಗೆ ಸಾಧ್ಯ?''
ಅಂದನು. 46ಯೇಸುವಿನ ಪ್ರಶ್ನೆಗೆ ಉತ್ತರಕೊಡಲು ಫರಿಸಾಯ
ರಲ್ಲಿ ಯಾರಿಗೂ ಸಾಧ್ಯವಾಗಲಿಲ್ಲ. ಅಂದಿನಿಂದ ಯೇಸುವನ್ನು
ವಂಚಿಸುವುದಕ್ಕಾಗಿ ಪ್ರಶ್ನೆ ಕೇಳಲು ಯಾರೂ ಧೈರ್ಯಪಡಲಿಲ್ಲ.

### ಯೇಸು ಧಾರ್ಮಿಕ ನಾಯಕರನ್ನು ಖಂಡಿಸಿದನು
(ಮಾರ್ಕ 12:38-40; ಲೂಕ 11:37-52; 20:45-47)

23 ಬಳಿಕ ಯೇಸು ನೆರೆದಿದ್ದ ಜನರೊಂದಿಗೂ ತನ್ನ
ಶಿಷ್ಯರೊಂದಿಗೂ ಮಾತಾಡಿ ಹೇಳಿದ್ದೇನೆಂದರೆ:
2''ಮೋಶೆಯ ಧರ್ಮಶಾಸ್ತ್ರ ಹೇಳುವುದನ್ನು ನಿಮಗೆ ತಿಳಿಸಲು
ಧರ್ಮೋಪದೇಶಕರಿಗೂ ಫರಿಸಾಯರಿಗೂ ಅಧಿಕಾರವಿದೆ.
3ಆದ್ದರಿಂದ ನೀವು ಅವರಿಗೆ ವಿಧೇಯರಾಗಿರಬೇಕು ಮತ್ತು
ಅವರು ಹೇಳಿದ್ದನ್ನೆಲ್ಲ ಕೈಕೊಂಡು ನಡೆಯಬೇಕು. ಆದರೆ ಅವರ
ಜೀವಿತಗಳು ಅನುಸರಿಸತಕ್ಕ ಒಳ್ಳೆಯ ಮಾದರಿ ಜೀವಿತಗಳಲ್ಲ.
ಅವರು ನಿಮಗೆ ತಿಳಿಸುವಂಥ ಸಂಗತಿಗಳನ್ನು ತಾವೇ
ಅನುಸರಿಸುವುದಿಲ್ಲ. 4ಅವರು ಬೇರೆಯವರಿಗೆ ಕಷ್ಟಕರವಾದ
ನಿಯಮಗಳನ್ನು ಕೊಟ್ಟು ಅವುಗಳಿಗೆ ವಿಧೇಯರಾಗಬೇಕೆಂದು
ಒತ್ತಾಯ ಮಾಡುತ್ತಾರೆ. ತಾವಾದರೊ ಆ ನಿಯಮಗಳಲ್ಲಿ
ಯಾವದನ್ನಾದರೂ ಅನುಸರಿಸಲು ಪ್ರಯತ್ನಿಸುವುದಿಲ್ಲ.

5''ತಮ್ಮನ್ನು ಬೇರೆ ಜನರು ನೋಡಲಿ ಎಂಬ ಒಂದೇ
ಉದ್ದೇಶದಿಂದ ಅವರು ಒಳ್ಳೆಯ ಕಾರ್ಯಗಳನ್ನು ಮಾಡುತ್ತಾರೆ.
ಪವಿತ್ರ ಗ್ರಂಥಗಳು ತುಂಬಿರುವ ವಿಶೇಷವಾದ ಚರ್ಮದ
ಚೀಲಗಳನ್ನು ಅವರು ಕಟ್ಟಿಕೊಂಡಿರುತ್ತಾರೆ. ಅವರು ಈ ಚೀಲ
ಗಳನ್ನು ಇನ್ನೂ ಹೆಚ್ಚುಹೆಚ್ಚು ದೊಡ್ಡದನ್ನಾಗಿ ಮಾಡುತ್ತಾರೆ.
ಜನರು ನೋಡಲಿ ಎಂದು ಅವರು ತಮ್ಮ ವಿಶೇಷ ಪ್ರಾರ್ಥನೆಯ
ಉಡುಪುಗಳನ್ನು ಮತ್ತಷ್ಟು ಉದ್ದ ಮಾಡುತ್ತಾರೆ. 6ಆ ಫರಿಸಾ
ಯರು ಮತ್ತು ಧರ್ಮೋಪದೇಶಕರು ಔತಣಗಳಲ್ಲಿ ಹಾಗೂ
ಸಭಾಮಂದಿರಗಳಲ್ಲಿ ಅತಿ ಪ್ರಾಮುಖ್ಯವಾದ ಸ್ಥಾನಗಳನ್ನು

---

**ನಾನು ... ದೇವರು** ವಿಮೋಚನ. 3:6, 15,16

**ನಿನ್ನ ... ಪ್ರೀತಿಸಬೇಕು** ಧರ್ಮೋಪದೇಶ. 6:5

**ನೀನು ... ಪ್ರೀತಿಸಬೇಕು** ಯಾಜಕ 6:5

ಅಪೇಕ್ಷಿಸುತ್ತಾರೆ. 7ಮಾರುಕಟ್ಟೆಗಳಲ್ಲಿ ಜನರು ತಮಗೆ
ಮರ್ಯಾದೆ ತೋರಿಸಬೇಕೆಂದು ಆಶಿಸುತ್ತಾರೆ; ಜನರಿಂದ
ಉಪದೇಶಕರೆನಿಸಿಕೊಳ್ಳಲು ಇಷ್ಟಪಡುತ್ತಾರೆ.

8“ಆದರೆ ನೀವು ಉಪದೇಶಕರೆನಿಸಿಕೊಳ್ಳಬೇಡಿ. ನೀವೆ
ಲ್ಲರೂ ಸಹೋದರ ಸಹೋದರಿಯರು. ನಿಮಗೆ ಒಬ್ಬನೇ ಉಪ
ದೇಶಕನು. 9ಈ ಲೋಕದಲ್ಲಿ ಯಾರನ್ನೂ ‘ತಂದೆ’ ಎಂದು
ಕರೆಯಬೇಡಿ. ನಿಮಗೆ ಒಬ್ಬನೇ ತಂದೆ. ಆತನು ಪರಲೋಕ
ದಲ್ಲಿದ್ದಾನೆ. 10‘ಗುರು’ವೆಂದೂ ಕರೆಸಿಕೊಳ್ಳಬೇಡಿ. ನಿಮಗೆ ಕ್ರಿಸ್ತ
ನೊಬ್ಬನೇ ಗುರು. 11ಸೇವಕನಂತೆ ನಿಮಗೆ ಸೇವೆ ಮಾಡುವವನೇ
ನಿಮ್ಮಲ್ಲಿ ಅತ್ಯಂತ ದೊಡ್ಡವನಾಗಿದ್ದಾನೆ. 12ತಾನು ಬೇರೆಯವರಿ
ಗಿಂತ ಉತ್ತಮನೆಂದು ತನ್ನನ್ನು ಭಾವಿಸಿಕೊಳ್ಳುವವನು ತಗ್ಗಿಸ
ಲ್ಪಡುವನು, ತನ್ನನ್ನು ತಗ್ಗಿಸಿಕೊಳ್ಳುವವನು ಉನ್ನತಿ
ಗೇರಿಸಲ್ಪಡುವನು.

13“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು, ಜನರು ಪರಲೋಕರಾಜ್ಯಕ್ಕೆ
ಪ್ರವೇಶಿಸುವ ದಾರಿಯನ್ನು ನೀವು ಮುಚ್ಚಿಬಿಡುತ್ತೀರಿ. ನೀವೂ
ಪ್ರವೇಶಿಸುವುದಿಲ್ಲ ಮತ್ತು ಪ್ರವೇಶಿಸುವುದಕ್ಕೆ ಪ್ರಯತ್ನಿಸುವ
ಜನರಿಗೂ ಬಿಡುವುದಿಲ್ಲ. 14 *

15ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು. ನಿಮ್ಮ ಮಾರ್ಗಗಳನ್ನು ಹಿಂಬಾ
ಲಿಸುವ ಒಬ್ಬನನ್ನು ಕಂಡುಕೊಳ್ಳಲು ನೀವು ಸಮುದ್ರಗಳನ್ನು
ದಾಟಿ ಬೇರೆಬೇರೆ ದೇಶಗಳಲ್ಲಿ ಪ್ರಯಾಣ ಮಾಡುತ್ತೀರಿ.
ಅವನನ್ನು ಕಂಡುಕೊಂಡ ಮೇಲೆ ನಿಮಗಿಂತಲೂ ಹೆಚ್ಚು
ಕೆಟ್ಟವನನ್ನಾಗಿ ಮಾಡುತ್ತೀರಿ. ನೀವು ನರಕಪಾತ್ರರಾಗುವಷ್ಟು
ಕೆಟ್ಟವರಾಗಿದ್ದೀರಿ.

16“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಜನರಿಗೆ ಮಾರ್ಗದರ್ಶನ ಮಾಡುತ್ತೀರಿ. ಆದರೆ
ನೀವೇ ಕುರುಡರು. ‘ಒಬ್ಬನು ದೇವಾಲಯದ ಹೆಸರಿನ ಮೇಲೆ
ವಾಗ್ದಾನ ಮಾಡಿದರೆ ಅದಕ್ಕೇನೂ ಬೆಲೆಯಿಲ್ಲ ಎನ್ನುತ್ತೀರಿ.
ಆದರೆ ಒಬ್ಬನು ದೇವಾಲಯದಲ್ಲಿರುವ ಚಿನ್ನದ ಮೇಲೆ ವಾಗ್ದಾನ
ಮಾಡಿದರೆ, ಅವನು ಅದನ್ನು ಈಡೇರಿಸಬೇಕು ಎಂದು
ಹೇಳುತ್ತೀರಿ! 17ನೀವು ಕುರುಡರಾದ ಮೂರ್ಖರು! ಯಾವುದು
ಹೆಚ್ಚಿನದು? ಚಿನ್ನವೋ ಅಥವಾ ದೇವಾಲಯವೋ? ಆ ಚಿನ್ನವು
ಪರಿಶುದ್ಧಗೊಂಡದ್ದು ದೇವಾಲಯದಿಂದಲೇ. ಆದ್ದರಿಂದ
ದೇವಾಲಯವೇ ಹೆಚ್ಚಿನದು. 18ಒಬ್ಬನು ಯಜ್ಞವೇದಿಕೆಯ
ಮೇಲೆ ಆಣೆಯಿಟ್ಟುಕೊಂಡರೆ ಅದಕ್ಕೇನೂ ಬೆಲೆಯಿಲ್ಲ
ಎನ್ನುತ್ತೀರಿ. ಆದರೆ ಒಬ್ಬನು ಯಜ್ಞವೇದಿಕೆಯ ಮೇಲಿರುವ
ಕಾಣಿಕೆಯ ಮೇಲೆ ವಾಗ್ದಾನಮಾಡಿದರೆ ಅವನು ಅದನ್ನು
ಈಡೇರಿಸಲೇಬೇಕು ಎಂದು ಹೇಳುತ್ತೀರಿ. 19ನೀವು
ಕುರುಡರು. ನಿಮಗೇನೂ ಅರ್ಥವಾಗುವುದಿಲ್ಲ. ಯಾವುದು
ಹೆಚ್ಚಿನದು? ಕಾಣಿಕೆಯೋ ಅಥವಾ ಯಜ್ಞವೇದಿಕೆಯೋ?
ಕಾಣಿಕೆ ಪರಿಶುದ್ಧಗೊಂಡದ್ದು ಯಜ್ಞವೇದಿಕೆಯಿಂದಲೇ. ಆದ್ದ
ರಿಂದ ಯಜ್ಞವೇದಿಕೆಯೇ ಹೆಚ್ಚಿನದು. 20ಯಜ್ಞವೇದಿಕೆಯ
ಮೇಲೆ ವಾಗ್ದಾನ ಮಾಡುವವನು ಯಜ್ಞವೇದಿಕೆಯ ಮತ್ತು
ಅದರ ಮೇಲಿರುವ ಕಾಣಿಕೆಯ ಮೇಲೆ ವಾಗ್ದಾನ
ಮಾಡಿದಂತಾಯಿತು. 21ದೇವಾಲಯದ ಮೇಲೆ ವಾಗ್ದಾನ
ಮಾಡುವವನು ನಿಜವಾಗಿಯೂ ದೇವಾಲಯದ ಮತ್ತು
ಅದರೊಳಗೆ ವಾಸವಾಗಿರುವಾತನ ಮೇಲೆ ವಾಗ್ದಾನ
ಮಾಡಿದಂತಾಯಿತು. 22ಪರಲೋಕದ ಮೇಲೆ ವಾಗ್ದಾನ
ಮಾಡುವವನು ದೇವರ ಸಿಂಹಾಸನದ ಮೇಲೆಯೂ ಆ
ಸಿಂಹಾಸನದ ಮೇಲೆ ಕುಳಿತಿರುವಾತನ ಮೇಲೆಯೂ ವಾಗ್ದಾನ
ಮಾಡಿದಂತಾಯಿತು.

23“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು. ನಿಮ್ಮಲ್ಲಿರುವ ಪ್ರತಿಯೊಂದರಲ್ಲೂ
ನಿಮ್ಮ ಪುದೀನ, ಸಬ್ಬಸ್ಸಿಗೆ ಸೊಪ್ಪು, ಜೀರಿಗೆ ಗಿಡಗಳಲ್ಲಿಯೂ ಸಹ
ಹತ್ತರಲ್ಲೊಂದು ಪಾಲನ್ನು ದೇವರಿಗೆ ಕೊಡುತ್ತೀರಿ. ಆದರೆ
ಧರ್ಮಶಾಸ್ತ್ರದ ಬೋಧನೆಗಳಲ್ಲಿ ನಿಜವಾಗಿಯೂ ಪ್ರಾಮುಖ್ಯ
ವಾದ ಆಜ್ಞೆಗಳನ್ನು ಅಂದರೆ ನ್ಯಾಯವನ್ನೂ ಕರುಣೆಯನ್ನೂ
ಯಥಾರ್ಥತೆಯನ್ನೂ ನೀವು ತೊರೆದುಬಿಟ್ಟಿದ್ದೀರಿ. ಈ ಆಜ್ಞೆ
ಗಳಿಗೆ ನೀವು ಮೊದಲು ವಿಧೇಯರಾಗಿ, ಈಗ ಮಾಡುತ್ತಿರು
ವಂಥ ಕಾರ್ಯಗಳನ್ನು ಮಾಡಬೇಕಿತ್ತು. 24ನೀವು ಜನರಿಗೆ
ಮಾರ್ಗದರ್ಶನ ಮಾಡುತ್ತೀರಿ. ಆದರೆ ನೀವೇ ಕುರುಡರು!
ತಾನು ಕುಡಿಯುವ ಪಾನೀಯದೊಳಗಿಂದ ಸಣ್ಣ ಸೊಳ್ಳೆಯನ್ನು
ತೆಗೆದುಹಾಕಿ ಆಮೇಲೆ ಒಂಟೆಯನ್ನು ನುಂಗುವವನಂತೆ
ನೀವಿದ್ದೀರಿ.

25“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು. ನೀವು ನಿಮ್ಮ ಪಾತ್ರೆ, ಬಟ್ಟಲುಗಳ
ಹೊರಭಾಗವನ್ನು ತೊಳೆದು ಸ್ವಚ್ಛಮಾಡುತ್ತೀರಿ. ಆದರೆ ಅವುಗಳ
ಒಳಭಾಗವು ಮೋಸದಿಂದಲೂ ನಿಮಗೆ ತೃಪ್ತಿ ನೀಡುವ
ಪದಾರ್ಥಗಳಿಂದಲೂ ತುಂಬಿವೆ. 26ಫರಿಸಾಯರೇ, ನೀವು
ಕುರುಡರು! ಮೊದಲು ಬಟ್ಟಲಿನ ಒಳಭಾಗವನ್ನು ಚೆನ್ನಾಗಿ
ಶುಚಿಮಾಡಿರಿ. ಆಗ ಬಟ್ಟಲಿನ ಹೊರಭಾಗವು ನಿಜವಾಗಿಯೂ
ಶುಚಿಯಾಗಿರುವದು.

27“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು. ನೀವು ಸುಣ್ಣ ಹಚ್ಚಿದ
ಸಮಾಧಿಗಳಂತಿದ್ದೀರಿ. ಆ ಸಮಾಧಿಗಳ ಹೊರಭಾಗ ಚಂದವಾಗಿ
ಕಾಣುತ್ತದೆ. ಆದರೆ ಒಳಭಾಗ ಸತ್ತವರ ಎಲುಬುಗಳಿಂದಲೂ
ಎಲ್ಲಾ ಬಗೆಯ ಹೊಲಸುಗಳಿಂದಲೂ ತುಂಬಿರುತ್ತದೆ. 28ನೀವು
ಅದೇ ರೀತಿ ಇದ್ದೀರಿ. ನಿಮ್ಮನ್ನು ನೋಡಿದ ಜನರು ನಿಮ್ಮನ್ನು
ಒಳ್ಳೆಯವರೆಂದು ಭಾವಿಸಿಕೊಳ್ಳುತ್ತಾರೆ. ಆದರೆ ನಿಮ್ಮ ಅಂತ
ರಂಗವು ಕಪಟದಿಂದಲೂ ದುಷ್ಟತನದಿಂದಲೂ ತುಂಬಿ
ಕೊಂಡಿದೆ.

29“ಧರ್ಮೋಪದೇಶಕರೇ, ಫರಿಸಾಯರೇ, ನಿಮ್ಮ ಗತಿ ಏನು
ಹೇಳಲಿ! ನೀವು ಕಪಟಿಗಳು. ನೀವು ಪ್ರವಾದಿಗಳ ಸಮಾಧಿಗಳನ್ನು
ಕಟ್ಟುತ್ತೀರಿ. ಒಳ್ಳೆಯವರಾಗಿ ಜೀವಿಸದವರ ಗೋರಿಗಳಿಗೆ
ಹೋಗಿ ಗೌರವ ತೋರಿಸುತ್ತೀರಿ. 30‘ನಮ್ಮ ಪಿತೃಗಳ ಕಾಲದಲ್ಲಿ
ನಾವು ಇದ್ದಿದ್ದರೆ ಈ ಪ್ರವಾದಿಗಳನ್ನು ಕೊಲ್ಲುವುದಕ್ಕೆ ಅವರಿಗೆ
ಸಹಾಯ ಮಾಡುತ್ತಿರಲಿಲ್ಲ’ ಎಂದು ಹೇಳುತ್ತೀರಿ. 31ಆ

---

**ವಚನ 14** ಧರ್ಮೋಪದೇಶಕರೇ, ಫರಿಸಾಯರೇ, ನಿಮಗೆ ಕೇಡಾಗುವುದು. ನೀವು ಕಪಟಿಗಳು. ನೀವು ವಿಧವೆಯರ ಮನೆಗಳನ್ನು ಕಸಿದುಕೊಳ್ಳುತ್ತೀರಿ. ಜನರು ನಿಮ್ಮನ್ನು ನೋಡಲೆಂದು ಉದ್ದವಾದ ಪ್ರಾರ್ಥನೆಗಳನ್ನು ಮಾಡುತ್ತೀರಿ. ಆದ್ದರಿಂದ ನೀವು ಕಠಿಣವಾದ ಶಿಕ್ಷೆ ಹೊಂದುವಿರಿ ಎಂದು ಕೆಲವು ಗ್ರೀಕ್ ಪ್ರತಿಗಳಲ್ಲಿ 14ನೇ ವಚನ ಸೇರಿಸಿದ್ದಾರೆ. ನೋಡಿ ಮಾರ್ಕ 12:40; ಲೂಕ 20:47

ಪ್ರವಾದಿಗಳನ್ನು ಕೊಂದವರ ಮಕ್ಕಳು (ಸಂತತಿಯವರು) ನೀವೇ
ಎಂಬುದಕ್ಕೆ ಇದೇ ಆಧಾರವಾಗಿದೆ. [32]ನಿಮ್ಮ ಪಿತೃಗಳು
ಪ್ರಾರಂಭಿಸಿದ ಆ ಪಾಪವನ್ನು ನೀವು ಪೂರ್ತಿಮಾಡುವಿರಿ!
[33]‘‘ನೀವು ಸರ್ಪಗಳು! ನೀವು ವಿಷಕರವಾದ ಹಾವುಗಳ
ಕುಟುಂಬದವರು! ನೀವು ದೇವರಿಂದ ತಪ್ಪಿಸಿಕೊಳ್ಳಲಾರಿರಿ.
ನೀವೆಲ್ಲರು ಅಪರಾಧಿಗಳೆಂಬ ತೀರ್ಪು ಹೊಂದಿ ನರಕಕ್ಕೆ
ಹೋಗುವಿರಿ! [34]ನಾನು ನಿಮಗೆ ಹೇಳುವುದೇನೆಂದರೆ, ನಿಮ್ಮ
ಬಳಿಗೆ ಪ್ರವಾದಿಗಳನ್ನೂ ಜ್ಞಾನಿಗಳನ್ನೂ ಉಪದೇಶಕರನ್ನೂ
ಕಳುಹಿಸುತ್ತೇನೆ. ನೀವು ಅವರಲ್ಲಿ ಕೆಲವರನ್ನು ಕೊಲ್ಲುವಿರಿ; ಇನ್ನು
ಕೆಲವರನ್ನು ಶಿಲುಬೆಗೇರಿಸುವಿರಿ; ಇತರ ಕೆಲವರನ್ನು ನಿಮ್ಮ
ಸಭಾಮಂದಿರಗಳಲ್ಲಿ ಹೊಡೆಯುವಿರಿ; ನೀವು ಅವರನ್ನು
ಊರಿಂದ ಊರಿಗೆ ಅಟ್ಟಿಬಿಡುವಿರಿ. [35]ಆದ್ದರಿಂದ ಭೂಮಿಯ
ಮೇಲೆ ಕೊಲ್ಲಲ್ಪಟ್ಟ ಎಲ್ಲಾ ಸತ್ಪುರುಷರ ಕೊಲೆಯ ಅಪರಾಧಕ್ಕೆ
ನೀವು ಗುರಿಯಾಗುವಿರಿ. ಸತ್ಪುರುಷನಾದ ಹೇಬೆಲನನ್ನು
ಮೊದಲುಗೊಂಡು ಬರಕೀಯನ ಮಗನಾದ ಜಕರೀಯನನ್ನು
ಕೊಂದದ್ದಕ್ಕೆ ನೀವು ಅಪರಾಧಿಗಳಾಗುವಿರಿ. ಅವನು
ದೇವಾಲಯಕ್ಕೂ ಯಜ್ಞವೇದಿಕೆಗೂ ನಡುವೆ ಕೊಲ್ಲಲ್ಪಟ್ಟನು.
[36]ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಈ ಕಾಲದಲ್ಲಿ
ಜೀವಿಸುತ್ತಿರುವ ನಿಮ್ಮ ಮೇಲೆ ಈ ಅಪರಾಧಗಳೆಲ್ಲಾ ಬರುತ್ತವೆ.

### ಜೆರುಸಲೇಮಿನ ಜನರಿಗೆ ಯೇಸು ನೀಡಿದ ಎಚ್ಚರಿಕೆ

(ಲೂಕ 13:34-35)

[37]‘‘ಜೆರುಸಲೇಮೇ, ಜೆರುಸಲೇಮೇ! ಪ್ರವಾದಿಗಳನ್ನು
ಕೊಲ್ಲುವವಳೇ, ದೇವರು ನಿನ್ನ ಬಳಿಗೆ ಕಳುಹಿಸಿದ ಜನರನ್ನು
ಕಲ್ಲುಗಳಿಂದ ಕೊಲ್ಲುವವಳೇ, ಅನೇಕ ಸಲ ನಿನ್ನ ಜನರಿಗೆ ನಾನು
ಸಹಾಯ ಮಾಡಬೇಕೆಂದಿದ್ದೆನು. ಕೋಳಿ ತನ್ನ ಮರಿಗಳನ್ನು
ರೆಕ್ಕೆಗಳ ಕೆಳಗೆ ಸೇರಿಸಿಕೊಳ್ಳುವ ಹಾಗೆ ನಿನ್ನ ಜನರನ್ನು
ಸೇರಿಸಿಕೊಳ್ಳಲು ನನಗೆ ಮನಸ್ಸಿತ್ತು. ಆದರೆ ನೀನು ಒಪ್ಪಲಿಲ್ಲ.
[38]ಈಗ ನಿನ್ನ ಮನೆಯು ಸಂಪೂರ್ಣವಾಗಿ ಬರಿದಾಗಿಬಿಟ್ಟಿದೆ.
[39]ನಾನು ನಿನಗೆ ಹೇಳುವುದೇನೆಂದರೆ, ‘ಪ್ರಭುವಿನ ಹೆಸರಿನಲ್ಲಿ
ಬರುವಾತನನ್ನು ದೇವರು ಆಶೀರ್ವದಿಸಲಿ* ಎಂದು ನೀನು
ಹೇಳುವತನಕ ನನ್ನನ್ನು ನೋಡುವುದೇ ಇಲ್ಲ.’’

### ನೆಲ ಸಮವಾಗಲಿರುವ ಮಹಾದೇವಾಲಯ

(ಮಾರ್ಕ 13:1-31; ಲೂಕ 21:5-33)

24 ಯೇಸು ದೇವಾಲಯದಿಂದ ಹೋಗುತ್ತಿದ್ದಾಗ ಆತನ
ಶಿಷ್ಯರು ದೇವಾಲಯದ ಕಟ್ಟಡಗಳನ್ನು ತೋರಿಸಲು
ಆತನ ಬಳಿಗೆ ಬಂದರು. [2]ಆಗ ಯೇಸು ‘‘ಈ ಕಟ್ಟಡಗಳನ್ನೆಲ್ಲ
ನೋಡುತ್ತಿದ್ದೀರಾ? ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಇವುಗಳೆಲ್ಲಾ ನಾಶವಾಗುತ್ತವೆ. ಇಲ್ಲಿ ಕಲ್ಲಿನ ಮೇಲೆ ಕಲ್ಲು
ಉಳಿಯದಂತೆ ಎಲ್ಲಾ ಕಲ್ಲುಗಳು ಕೆಡವಲ್ಪಡುತ್ತವೆ’’ ಎಂದು
ಹೇಳಿದನು.
[3]ಬಳಿಕ ಯೇಸು ಆಲಿವ್ ಗುಡ್ಡದ ಮೇಲೆ ಕುಳಿತು
ಕೊಂಡಿದ್ದಾಗ, ಶಿಷ್ಯರು ಪ್ರತ್ಯೇಕವಾಗಿ ಯೇಸುವಿನ ಬಳಿಗೆ
ಬಂದು, ‘‘ಇವುಗಳೆಲ್ಲಾ ಯಾವಾಗ ಸಂಭವಿಸುತ್ತವೆ! ನೀನು ಈ
ಲೋಕಕ್ಕೆ ಮತ್ತೊಮ್ಮೆ ಬರುವಾಗ ಮತ್ತು ಲೋಕದ ಸಮಾಪ್ತಿಯ
ಸಮಯ ಬಂದಾಗ ಸೂಚನೆಗಾಗಿ ಏನು ಸಂಭವಿಸುವುದು?
ನಮಗೆ ತಿಳಿಸು!’’ ಎಂದು ಕೇಳಿದರು.
[4]ಯೇಸು ಅವರಿಗೆ ಕೊಟ್ಟ ಉತ್ತರವಿದು: ‘‘ಎಚ್ಚರವಾಗಿರಿ!
ನಿಮ್ಮನ್ನು ಮೋಸಗೊಳಿಸಲು ಯಾರಿಗೂ ಅವಕಾಶ ಕೊಡ
ಬೇಡಿ. [5]ಅನೇಕರು ನನ್ನ ಹೆಸರಿನಲ್ಲಿ ಬಂದು, ‘ನಾನೇ ಕ್ರಿಸ್ತನು’
ಎಂದು ಹೇಳಿ ಅನೇಕರನ್ನು ಮೋಸಪಡಿಸುವರು. [6]ನಿಮ್ಮ
ಸಮೀಪದಲ್ಲಿ ನಡೆಯುತ್ತಿರುವ ಯುದ್ಧಗಳ ಶಬ್ದವನ್ನೂ ಬಹು
ದೂರದಲ್ಲಿ ನಡೆಯುತ್ತಿರುವ ಯುದ್ಧಗಳ ಸುದ್ದಿಯನ್ನೂ ನೀವು
ಕೇಳುವಿರಿ. ಆದರೆ ಹೆದರಬೇಡಿ. ಅಂತ್ಯವು ಬರುವುದಕ್ಕಿಂತ
ಮುಂಚೆ ಇವುಗಳು ಸಂಭವಿಸಲೇಬೇಕು. [7]ಜನಾಂಗಗಳು ಬೇರೆ
ಜನಾಂಗಗಳಿಗೆ ವಿರೋಧವಾಗಿ ಯುದ್ಧ ಮಾಡುತ್ತವೆ. ರಾಜ್ಯ
ಗಳು ಬೇರೆಬೇರೆ ರಾಜ್ಯಗಳಿಗೆ ವಿರೋಧವಾಗಿ ಯುದ್ಧ ಮಾಡು
ತ್ತವೆ. ಬರಗಾಲಗಳು ಬರುತ್ತವೆ. ಬೇರೆಬೇರೆ ಸ್ಥಳಗಳಲ್ಲಿ
ಭೂಕಂಪಗಳು ಆಗುತ್ತವೆ. [8]ಇವೆಲ್ಲಾ ಪ್ರಸವವೇದನೆಯ
ಆರಂಭವಷ್ಟೇ.
[9]‘‘ಆಗ ಜನರು ನಿಮ್ಮನ್ನು ಹಿಂಸಿಸಿ, ಮರಣದಂಡನೆ ವಿಧಿಸಲು
ಅಧಿಕಾರಿಗಳಿಗೆ ಒಪ್ಪಿಸಿಕೊಡುವರು. ಜನರೆಲ್ಲರೂ ನಿಮ್ಮನ್ನು
ವಿರೋಧಿಸುವರು. ನೀವು ನನ್ನಲ್ಲಿ ನಂಬಿಕೆ ಇಟ್ಟದ್ದಕ್ಕಾಗಿ
ಇವುಗಳೆಲ್ಲಾ ನಿಮಗೆ ಸಂಭವಿಸುವವು. [10]ಆ ಸಮಯದಲ್ಲಿ
ಅನೇಕ ವಿಶ್ವಾಸಿಗಳು ತಮ್ಮ ನಂಬಿಕೆಯನ್ನು ಕಳೆದುಕೊಳ್ಳುವರು.
ಅವರು ಒಬ್ಬರಿಗೊಬ್ಬರಿಗೆ ವಿರೋಧವಾಗಿ ತಿರುಗಿಕೊಂಡು
ಒಬ್ಬರನ್ನೊಬ್ಬರು ದ್ವೇಷಿಸುವರು. [11]ಅನೇಕ ಸುಳ್ಳುಪ್ರವಾದಿ
ಗಳು ಬಂದು ಎಷ್ಟೋ ಜನರನ್ನು ವಂಚಿಸುವರು. [12]ಲೋಕದಲ್ಲಿ
ದುಷ್ಟತನವು ಹೆಚ್ಚಾಗಿ ಬಹುಜನ ವಿಶ್ವಾಸಿಗಳ ಪ್ರೀತಿಯು ಅಡಗಿ
ಹೋಗುವುದು. [13]ಆದರೆ ಕಡೆಯವರೆಗೂ ದೃಢವಾಗಿರುವವನು
ರಕ್ಷಣೆ ಹೊಂದುತ್ತಾನೆ. [14]ದೇವರ ರಾಜ್ಯದ ಶುಭವಾರ್ತೆಯನ್ನು
ಲೋಕದಲ್ಲೆಲ್ಲಾ ಪ್ರತಿ ಜನಾಂಗಕ್ಕೂ ಸಾರಲಾಗುವುದು. ಆಗ
ಅಂತ್ಯವು ಬರುತ್ತದೆ.
[15]‘‘ಭಯಂಕರವಾದ ನಾಶಕ್ಕೆ ಕಾರಣವಾದ ವಸ್ತು
ವೊಂದನ್ನು* ಕುರಿತು ಪ್ರವಾದಿ ದಾನಿಯೇಲನು ಹೇಳಿದ್ದಾನೆ.
ಈ ಭಯಂಕರವಾದ ವಸ್ತುವು ದೇವಾಲಯದ ಪರಿಶುದ್ಧ
ಸ್ಥಳದಲ್ಲಿ ನಿಂತಿರುವುದನ್ನು ನೀವು ನೋಡುವಿರಿ. (ಇದನ್ನು
ಓದುತ್ತಿರುವವನು ಇದರ ಅರ್ಥವನ್ನು ಗ್ರಹಿಸಿಕೊಳ್ಳಲಿ.) [16]ಆ
ಸಮಯದಲ್ಲಿ ಜುದೇಯದಲ್ಲಿರುವ ಜನರು ಬೆಟ್ಟಗಳಿಗೆ
ಓಡಿಹೋಗಲಿ. [17]ಮಾಳಿಗೆಯ ಮೇಲಿರುವವನು ಇಳಿದು ತನ್ನ
ವಸ್ತುಗಳನ್ನು ಮನೆಯಿಂದ ತೆಗೆದುಕೊಳ್ಳದೆ ಓಡಿಹೋಗಲಿ.
[18]ಹೊಲದಲ್ಲಿರುವವನು ತನ್ನ ಮೇಲಂಗಿಯನ್ನು ತೆಗೆದು
ಕೊಳ್ಳುವುದಕ್ಕಾಗಿ ಮನೆಗೆ ಹಿಂತಿರುಗದಿರಲಿ. [19]ಆ ಸಮಯದಲ್ಲಿ
ಗರ್ಭಿಣಿಯರಿಗೂ ಮೊಲೆಕೂಸುಗಳಿರುವ ಸ್ತ್ರೀಯರಿಗೂ
ಎಂಥಾ ಗೋಳಾಟ! [20]ನೀವು ಓಡಿಹೋಗಬೇಕಾದ ಈ
ಸಮಯವು ಚಳಿಗಾಲದಲ್ಲಾಗಲಿ ಸಬ್ಬತ್‌ದಿನದಲ್ಲಾಗಲಿ ಬರ
ದಂತೆ ಪ್ರಾರ್ಥಿಸಿರಿ. [21]ಏಕೆಂದರೆ ಆ ಸಮಯದಲ್ಲಿ ಮಹಾ ಸಂಕಟ
ಇರುವದು. ಲೋಕವು ಸೃಷ್ಟಿಯಾದಂದಿನಿಂದ ಇಂಥ ಸಂಕಟವು
ಎಂದೂ ಸಂಭವಿಸಿಲ್ಲ. ಇನ್ನು ಮುಂದೆಯೂ ಸಂಭವಿಸುವುದಿಲ್ಲ.
[22]ದೇವರು ಭಯಂಕರವಾದ ಆ ಸಮಯವನ್ನು ಕಡಿಮೆಗೊಳಿ

---

**ಪ್ರಭುವಿನ … ಆಶೀರ್ವದಿಸಲಿ** ಕೀರ್ತನೆ 118:26

**ಭಯಂಕರವಾದ … ವಸ್ತುವೊಂದನ್ನು** ದಾನಿಯೇಲ 9:27; 12:11

ಸಲು ತೀರ್ಮಾನಿಸಿದ್ದಾನೆ. ಇಲ್ಲವಾದರೆ, ಜೀವದಿಂದ ಉಳಿ
ಯಲು ಯಾರಿಗೂ ಸಾಧ್ಯವಿಲ್ಲ. ತಾನು ಆರಿಸಿಕೊಂಡ ಜನರ
ನಿಮಿತ್ತ ದೇವರು ಆ ಸಮಯವನ್ನು ಕಡಿಮೆ ಮಾಡಿದ್ದಾನೆ. 23ಆ
ಸಮಯದಲ್ಲಿ ಕೆಲವರು ನಿಮಗೆ, ‘ನೋಡಿ, ಕ್ರಿಸ್ತನು ಅಲ್ಲಿದ್ದಾನೆ!’
ಎಂದು ಹೇಳಬಹುದು. ಇಲ್ಲವೆ ಬೇರೊಬ್ಬನು, ‘ಆತನು
ಇಲ್ಲಿದ್ದಾನೆ!’ ಎಂದು ಹೇಳಬಹುದು. ಆದರೆ ಅವರನ್ನು ನಂಬ
ಬೇಡಿ.

24ಸುಳ್ಳು ಕ್ರಿಸ್ತರು ಮತ್ತು ಸುಳ್ಳುಪ್ರವಾದಿಗಳು ಬಂದು
ದೇವರು ಆರಿಸಿಕೊಂಡಿರುವ ಜನರನ್ನು ಮೋಸಗೊಳಿಸು
ವುದಕ್ಕಾಗಿ ಮಹತ್ಕಾರ್ಯಗಳನ್ನು ಮತ್ತು ಅದ್ಭುತಕಾರ್ಯ
ಗಳನ್ನು ಮಾಡುವರು. 25ಅದು ಸಂಭವಿಸುವದಕ್ಕೆ ಮುಂಚೆಯೇ
ನಾನು ಅದರ ವಿಷಯವಾಗಿ ನಿಮಗೆ ಎಚ್ಚರಿಕೆ ಕೊಟ್ಟಿದ್ದೇನೆ.

26“‘ಕ್ರಿಸ್ತನು ಅಡವಿಯಲ್ಲಿದ್ದಾನೆ!’ ಎಂದು ಕೆಲವರು
ಹೇಳಿದರೆ ಅಡವಿಗೆ ಹೋಗಬೇಡಿ. ‘ಕ್ರಿಸ್ತನು ಆ ಕೋಣೆ ಒಳಗೆ
ಇದ್ದಾನೆ!’ ಎಂದು ಹೇಳಿದರೆ ಅದನ್ನು ನಂಬಬೇಡಿ. 27ಮನುಷ್ಯ
ಕುಮಾರನು ಜನರಿಗೆಲ್ಲ ಕಾಣಿಸುವಂತೆ ಬರುತ್ತಾನೆ. ಮನುಷ್ಯ
ಕುಮಾರನ ಪ್ರತ್ಯಕ್ಷತೆಯು ಆಕಾಶದಲ್ಲಿ ಮಿಂಚು ಹೊಳೆಯು
ವಂತೆ ಪ್ರಕಾಶಿಸುತ್ತಾ ಲೋಕದ ಎಲ್ಲಾ ಕಡೆಗಳಲ್ಲೂ ಕಾಣಿಸು
ವುದು. 28ಹದ್ದುಗಳು ಎಲ್ಲಿ ಕೂಡಿಬರುತ್ತವೆಯೊ ಅಲ್ಲಿ ಹೆಣವಿರು
ತ್ತದೆ ಎಂಬುದು ನಿಮಗೆ ಗೊತ್ತೇ ಇದೆ. ಅದೇ ರೀತಿ ನನ್ನ
ಬರುವಿಕೆಯೂ ಸ್ಪಷ್ಟವಾಗಿರುವುದು.

29 “ಆ ದಿನಗಳ ಸಂಕಟವು ತೀರಿದ ಕೂಡಲೇ:
‘ಸೂರ್ಯನು ಕತ್ತಲಾಗುವನು, ಚಂದ್ರನು ಕಾಂತಿ
ಹೀನನಾಗುವನು. ನಕ್ಷತ್ರಗಳು ಆಕಾಶದಿಂದ
ಕಳಚಿ ಬೀಳುವವು. ಆಕಾಶಮಂಡಲವು ಕಂಪಿಸು
ವುದು.’

*ಯೆಶಾಯ13:10; 34:45*

30“ಆಗ ಮನುಷ್ಯಕುಮಾರನ ಆಗಮನದ ಸೂಚನೆಯು
ಆಕಾಶದಲ್ಲಿ ಕಾಣಿಸಿಕೊಳ್ಳುವುದು. ಲೋಕದ ಜನರೆಲ್ಲಾ
ಗೋಳಾಡುವರು. ಆಕಾಶದಲ್ಲಿ ಮೇಘಗಳ ಮೇಲೆ ಆತನು
ಬರುವುದನ್ನು ಜನರೆಲ್ಲರೂ ನೋಡುವರು. ಆತನು ಶಕ್ತಿ
ಸಾಮರ್ಥ್ಯದಿಂದಲೂ ಮಹಿಮೆಯಿಂದಲೂ ಬರುವನು.
31ಮಹಾಶಬ್ದದ ತುತೂರಿಯ ಘೋಷಣೆಯೊಡನೆ ಮನುಷ್ಯ
ಕುಮಾರನು ತನ್ನ ದೂತರನ್ನು ಭೂಮಿಯ ಎಲ್ಲಾ ಕಡೆಗೆ
ಕಳುಹಿಸುವನು. ಆತನು ಆರಿಸಿಕೊಂಡವರನ್ನು ದೇವದೂತರು
ಭೂಲೋಕದ ಎಲ್ಲಾ ಕಡೆಗಳಿಂದಲೂ ಒಟ್ಟುಗೂಡಿಸುವರು.

32“ಅಂಜೂರದ ಮರವು ನಮಗೆ ಒಂದು ಪಾಠವನ್ನು ಕಲಿಸು
ತ್ತದೆ. ಅಂಜೂರದ ಮರದ ಕೊಂಬೆಗಳು ಹಸುರಾಗಿ ಎಳೆಯ
ದಾಗಿದ್ದು ಹೊಸ ಎಲೆಗಳು ಬೆಳೆಯುವುದಕ್ಕೆ ಪ್ರಾರಂಭಿಸಿದಾಗ,
ಬೇಸಿಗೆಯು ಹತ್ತಿರವಾಯಿತೆಂದು ನೀವು ತಿಳಿದುಕೊಳ್ಳುತ್ತೀರಿ.
33ನಾನು ನಿಮಗೆ ಹೇಳಿದ ಈ ಸಂಗತಿಗಳಿಗೂ ಅದು ಅನ್ವಯಿಸು
ತ್ತದೆ. ಈ ಸಂಗತಿಗಳೆಲ್ಲಾ ಸಂಭವಿಸುತ್ತಿರುವುದನ್ನು ನೀವು
ನೋಡುವಾಗ ಆ ಸಮಯ ಹತ್ತಿರವಾಯಿತೆಂದೂ ಬರುವದಕ್ಕೆ
ಸಿದ್ಧವಾಗಿದೆಯೆಂದೂ ತಿಳಿದುಕೊಳ್ಳುವಿರಿ. ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ.

34ಇಂದಿನ ಜನರು ಇನ್ನೂ ಜೀವಿಸಿರುವಾಗಲೇ ಈ ಎಲ್ಲಾ
ಸಂಗತಿಗಳು ಸಂಭವಿಸುತ್ತವೆ! 35ಇಡೀ ಪ್ರಪಂಚ, ಭೂಮಿ ಮತ್ತು
ಆಕಾಶಗಳು ನಾಶವಾಗುತ್ತವೆ, ಆದರೆ ನಾನು ಹೇಳಿದ
ಮಾತುಗಳು ನಾಶವಾಗುವುದೇ ಇಲ್ಲ!

### ಆ ಸಮಯ ದೇವರೊಬ್ಬನಿಗೆ ಗೊತ್ತಿದೆ

(ಮಾರ್ಕ 13:32-37; ಲೂಕ 17:26-30; 34-36)

36“ಆ ದಿನವು ಇಲ್ಲವೆ ಆ ಸಮಯವು ಯಾವಾಗ ಬರುತ್ತದೆ
ಎಂಬುದು ಯಾರಿಗೂ ತಿಳಿಯದು. ಮಗನಿಗೂ ಮತ್ತು
ಪರಲೋಕದಲ್ಲಿರುವ ದೇವದೂತರಿಗೂ ಆ ದಿನವು ಅಥವಾ ಆ
ಸಮಯವು ಯಾವಾಗ ಬರುತ್ತದೆ ಎಂಬುದು ತಿಳಿಯದು.
ತಂದೆಗೆ ಮಾತ್ರ ಗೊತ್ತಿದೆ. 37ನೋಹನ ಕಾಲದಲ್ಲಿ ಸಂಭವಿಸಿ
ದಂತೆಯೇ ಮನುಷ್ಯಕುಮಾರನು ಬರುವಾಗಲೂ ಸಂಭವಿಸು
ತ್ತದೆ.

38ಜಲಪ್ರಳಯಕ್ಕಿಂತ ಮುಂಚೆ ಜನರು ತಿನ್ನುತ್ತಿದ್ದರು,
ಕುಡಿಯುತ್ತಿದ್ದರು, ಮದುವೆಯಾಗುತ್ತಿದ್ದರು, ಮತ್ತು ತಮ್ಮ
ಮಕ್ಕಳಿಗೂ ಮದುವೆ ಮಾಡಿಕೊಡುತ್ತಾ ಇದ್ದರು. ನೋಹನು
ನಾವೆಯೊಳಗೆ ಹೋಗುವ ತನಕ ಜನರು ಅವುಗಳನ್ನು ಮಾಡು
ತ್ತಲೇ ಇದ್ದರು. 39ಏನು ಸಂಭವಿಸುತ್ತಿದೆ ಎಂಬುದು ಅವರಿಗೆ
ತಿಳಿದಿರಲಿಲ್ಲ. ಆಗ ಜಲಪ್ರಳಯವು ಬಂದು ಆ ಜನರನ್ನೆಲ್ಲಾ
ನಾಶಮಾಡಿತು. ಮನುಷ್ಯಕುಮಾರನು ಬರುವಾಗಲೂ ಅದೇ
ರೀತಿಯಾಗುವುದು. 40ಹೊಲದಲ್ಲಿ ಇಬ್ಬರು ಒಟ್ಟಿಗೆ ಕೆಲಸ
ಮಾಡುತ್ತಿದ್ದರೆ ಒಬ್ಬನನ್ನು ತೆಗೆದುಕೊಳ್ಳಲಾಗುವುದು,
ಮತ್ತೊಬ್ಬನನ್ನು ಬಿಡಲಾಗುವುದು. 41ಇಬ್ಬರು ಹೆಂಗಸರು
ಬೀಸುವ ಕಲ್ಲಿನಲ್ಲಿ ಧಾನ್ಯ ಬೀಸುತ್ತಿದ್ದರೆ ಅವರಲ್ಲಿ ಒಬ್ಬಳನ್ನು
ತೆಗೆದುಕೊಳ್ಳಲಾಗುವುದು ಮತ್ತೊಬ್ಬಳನ್ನು ಬಿಡಲಾಗುವುದು.

42“ಆದ್ದರಿಂದ ಯಾವಾಗಲೂ ಸಿದ್ಧವಾಗಿರಿ. ನಿಮ್ಮ ಪ್ರಭು
ಬರುವ ದಿನ ನಿಮಗೆ ತಿಳಿಯದು. 43ಇದನ್ನು ಜ್ಞಾಪಿಸಿಕೊಳ್ಳಿ.
ಕಳ್ಳನು ಯಾವಾಗ ಬರುತ್ತಾನೆಂದು ಮನೆಯ ಯಜಮಾನನಿಗೆ
ತಿಳಿದಿದ್ದರೆ, ಅವನು ಎಚ್ಚರವಾಗಿದ್ದು ಕಳ್ಳನನ್ನು ಮನೆಯೊಳಗೆ
ಬರಗೊಡಿಸುತ್ತಿರಲಿಲ್ಲ. 44ಆದ್ದರಿಂದ ನೀವು ಸಹ ಸಿದ್ಧವಾಗಿರಿ.
ನೀವು ನೆನಸದ ಸಮಯದಲ್ಲಿ ಮನುಷ್ಯಕುಮಾರನು ಬರುತ್ತಾನೆ.

45“ವಿವೇಕಿಯೂ ನಂಬಿಗಸ್ತನೂ ಆದ ಸೇವಕನು ಯಾರು?
ಇತರ ಸೇವಕರಿಗೆ ಆಹಾರವನ್ನು ತಕ್ಕ ಸಮಯದಲ್ಲಿ
ಕೊಡುವುದಕ್ಕಾಗಿ ಯಜಮಾನನು ಯಾವ ಸೇವಕನ ಮೇಲೆ
ಭರವಸೆಯಿಡುತ್ತಾನೊ ಅವನೇ. 46ತನಗೆ ಕೊಟ್ಟ ಕೆಲಸವನ್ನು
ಮಾಡುತ್ತಿರುವಾಗ ಯಜಮಾನನು ಬಂದರೆ ಆ ಸೇವಕನಿಗೆ
ಬಹಳ ಸಂತೋಷವಾಗುತ್ತದೆ. 47ನಾನು ನಿಮಗೆ ಸತ್ಯವನ್ನೇ
ಹೇಳುತ್ತೇನೆ. ಆ ಯಜಮಾನನು ತನ್ನ ಆಸ್ತಿಗೆಲ್ಲಾ ಆ ಸೇವಕನನ್ನು
ಮೇಲ್ವಿಚಾರಕನನ್ನಾಗಿ ನೇಮಿಸುವನು. 48ಆದರೆ ಸೇವಕನು
ದುಷ್ಟನಾಗಿದ್ದರೆ ಮತ್ತು ತನ್ನ ಯಜಮಾನನು ಬೇಗನೆ ಹಿಂತಿರುಗಿ
ಬರುವುದಿಲ್ಲ ಎಂದು ನೆನಸಿಕೊಂಡಿದ್ದರೆ ಅವನಿಗೆ ಏನು
ಸಂಭವಿಸುತ್ತದೆ? 49ಆ ಸೇವಕನು ಇತರ ಸೇವಕರನ್ನು
ಹೊಡೆಯುತ್ತಾ ತನ್ನಂಥ ಜನರೊಂದಿಗೆ ಸೇರಿಕೊಂಡು ತಿನ್ನುತ್ತಾ
ಕುಡಿಯುತ್ತಾ ಇರುವನು. 50ಹೀಗೆ ಅವನಿನ್ನೂ ಸಿದ್ಧನಾಗಿಲ್ಲ
ದಿರುವಾಗ ಯಜಮಾನನು ಅನಿರೀಕ್ಷಿತವಾಗಿ ಬಂದು
51ಅವನನ್ನು ಶಿಕ್ಷಿಸಿ ಕಪಟಿಗಳಿರುವ ಸ್ಥಳಕ್ಕೆ ನೂಕಿಸುವನು. ಆ

ಸ್ಥಳದಲ್ಲಿ ಜನರು ಬಾಧೆಯಿಂದ ಗೋಳಾಡುತ್ತಾ ತಮ್ಮ ಹಲ್ಲು
ಗಳನ್ನು ಕಡಿಯುತ್ತಾ ಇರುವರು.

## ಹತ್ತು ಮಂದಿ ಕನ್ನಿಕೆಯರನ್ನು ಕುರಿತ ಸಾಮ್ಯ

25 ಆ ದಿನಗಳಲ್ಲಿ ಪರಲೋಕರಾಜ್ಯವು ಹೇಗಿರುತ್ತದೆ
ಎನ್ನುವುದಕ್ಕೆ ಈ ಸಾಮ್ಯವು ಉದಾಹರಣೆಯಾಗಿದೆ.
ಹತ್ತು ಮಂದಿ ಕನ್ನಿಕೆಯರು ತಮ್ಮ ದೀಪಗಳನ್ನು ತೆಗೆದುಕೊಂಡು
ಮದುಮಗನನ್ನು ಎದುರುಗೊಳ್ಳಲು ಹೊರಟರು. 2ಅವರಲ್ಲಿ
ಐದು ಮಂದಿ ಬುದ್ಧಿಹೀನರಾಗಿದ್ದರು. ಇನ್ನುಳಿದ ಐದು ಮಂದಿ
ಬುದ್ಧಿವಂತೆಯರಾಗಿದ್ದರು. 3ಬುದ್ಧಿಹೀನ ಕನ್ನಿಕೆಯರು ತಮ್ಮ
ದೀಪಾರತಿಗಳನ್ನು ತಂದರೇ ಹೊರತು ಬೇಕಾಗುವಷ್ಟು ಎಣ್ಣೆ
ಯನ್ನು ತೆಗೆದುಕೊಳ್ಳಲಿಲ್ಲ. 4ಬುದ್ಧಿವಂತೆಯರು ತಮ್ಮ ದೀಪ
ಗಳೊಂದಿಗೆ ಬೇಕಾದಷ್ಟು ಎಣ್ಣೆಯನ್ನೂ ತೆಗೆದುಕೊಂಡರು.
5ಮದುಮಗನ ಆಗಮನ ತಡವಾಯಿತು. ಅವರೆಲ್ಲರೂ
ಆಯಾಸದಿಂದ ತೂಕಡಿಸುತ್ತಾ ನಿದ್ರೆಹೋದರು.

6“ಮಧ್ಯರಾತ್ರಿಯಲ್ಲಿ, ‘ಮದುಮಗನು ಬರುತ್ತಿದ್ದಾನೆ!
ಬನ್ನಿರಿ, ಆತನನ್ನು ಸಂಧಿಸಿರಿ!’ ಎಂದು ಯಾರೋ ಒಬ್ಬನು
ಪ್ರಕಟಿಸಿದನು.

7“ಆಗ ಕನ್ನಿಕೆಯರೆಲ್ಲ ಎಚ್ಚರಗೊಂಡು ತಮ್ಮ ದೀಪಾರತಿ
ಗಳನ್ನು ಸಿದ್ಧಮಾಡಿಕೊಂಡರು. 8ಬುದ್ಧಿಹೀನ ಕನ್ನಿಕೆಯರು
ಬುದ್ಧಿವಂತ ಕನ್ನಿಕೆಯರಿಗೆ, ‘ನಿಮ್ಮ ಎಣ್ಣೆಯಲ್ಲಿ ನಮಗೆ ಸ್ವಲ್ಪ
ಕೊಡಿ. ನಮ್ಮ ದೀಪಾರತಿಗಳಲ್ಲಿದ್ದ ಎಣ್ಣೆಯೆಲ್ಲಾ ಮುಗಿಯಿತು’
ಎಂದರು.

9“ಬುದ್ಧಿವಂತೆಯರು, ‘ಇಲ್ಲ! ನಮ್ಮಲ್ಲಿರುವ ಎಣ್ಣೆ ನಮಗೇ
ಸಾಕಾಗದಿರಬಹುದು. ಅಂಗಡಿಗೆ ಹೋಗಿ ಕೊಂಡುಕೊಳ್ಳಿರಿ’
ಎಂದು ಉತ್ತರ ಕೊಟ್ಟರು.

10“ಆದ್ದರಿಂದ ಐದು ಮಂದಿ ಬುದ್ಧಿಹೀನ ಕನ್ನಿಕೆಯರು ಎಣ್ಣೆ
ಕೊಂಡುಕೊಳ್ಳುವುದಕ್ಕೆ ಹೋದರು. ಅವರು ಹೋಗುತ್ತಿರು
ವಾಗ, ಮದುಮಗನು ಬಂದನು. ಸಿದ್ಧವಾಗಿದ್ದ ಕನ್ನಿಕೆಯರು
ಮದುಮಗನ ಜೊತೆಯಲ್ಲಿ ಔತಣಕ್ಕೆ ಹೋದರು. ನಂತರ
ಬಾಗಿಲು ಮುಚ್ಚಲಾಯಿತು.

11“ತರುವಾಯ ಬುದ್ಧಿಹೀನ ಕನ್ನಿಕೆಯರು ಬಂದು,
‘ಸ್ವಾಮೀ, ಸ್ವಾಮೀ, ಒಳಗೆ ಹೋಗಲು ನಮಗೆ ಬಾಗಿಲು ತೆರೆ’
ಅಂದರು.

12“ಆದರೆ ಮದುಮಗನು, ‘ನಾನು ನಿಮಗೆ ಸತ್ಯವನ್ನೇ
ಹೇಳುತ್ತೇನೆ. ನೀವು ಯಾರೋ ನನಗೆ ಗೊತ್ತಿಲ್ಲ’ ಎಂದು
ಉತ್ತರಕೊಟ್ಟನು.

13“ಆದ್ದರಿಂದ ಯಾವಾಗಲೂ ಸಿದ್ಧವಾಗಿರಿ. ಮನುಷ್ಯ
ಕುಮಾರನು ಬರುವ ದಿನವಾಗಲಿ ಸಮಯವಾಗಲಿ ನಿಮಗೆ
ಗೊತ್ತಿಲ್ಲ.

## ಮೂವರು ಸೇವಕರನ್ನು ಕುರಿತ ಸಾಮ್ಯ

(ಲೂಕ 19:11-27)

14“ಪರಲೋಕರಾಜ್ಯವು, ತನ್ನ ಮನೆಯನ್ನು ಬಿಟ್ಟು ಬೇರೆ
ಸ್ಥಳವನ್ನು ಸಂದರ್ಶಿಸುವುದಕ್ಕೆ ಪ್ರಯಾಣ ಮಾಡಿದ ಒಬ್ಬ
ಮನುಷ್ಯನಿಗೆ ಹೋಲಿಕೆಯಾಗಿದೆ. ಆ ಮನುಷ್ಯನು ತಾನು
ಹೊರಡುವುದಕ್ಕೆ ಮುಂಚೆ ತನ್ನ ಸೇವಕರೊಂದಿಗೆ ಮಾತನಾಡಿ,
ತನ್ನ ಆಸ್ತಿಯನ್ನು ನೋಡಿಕೊಳ್ಳಲು ಅವರಿಗೆ ಹೇಳಿದನು.
15ಅವನು ಆ ಸೇವಕರ ಸಾಮರ್ಥ್ಯಕ್ಕನುಸಾರವಾಗಿ ಎಷ್ಟೆಷ್ಟು
ಜವಾಬ್ದಾರಿಕೆಯನ್ನು ಕೊಡಬೇಕೆಂಬುದನ್ನು ನಿರ್ಧರಿಸಿದನು.
ಅವನು ಒಬ್ಬ ಸೇವಕನಿಗೆ ಐದು ತಲಾಂತು* ಮತ್ತೊಬ್ಬನಿಗೆ
ಎರಡು ತಲಾಂತು ಕೊಟ್ಟನು. ಮೂರನೇ ಸೇವಕನಿಗೆ ಒಂದು
ತಲಾಂತು ಕೊಟ್ಟನು. ಬಳಿಕ ಅವನು ಬೇರೆ ಸ್ಥಳಕ್ಕೆ ಹೊರಟು
ಹೋದನು. 16ಐದು ತಲಾಂತು ತೆಗೆದುಕೊಂಡ ಸೇವಕನು
ತಕ್ಷಣವೇ ಹೋಗಿ ಆ ಹಣವನ್ನು ವ್ಯಾಪಾರಕ್ಕೆ ಹಾಕಿ ಇನ್ನೂ ಐದು
ತಲಾಂತು ಸಂಪಾದಿಸಿದನು. 17ಎರಡು ತಲಾಂತು ಹೊಂದಿದ
ಸೇವಕನೂ ಅದೇ ರೀತಿ ಆ ಹಣವನ್ನು ವ್ಯಾಪಾರಕ್ಕೆ ಹಾಕಿ ಇನ್ನೂ
ಎರಡು ತಲಾಂತು ಸಂಪಾದಿಸಿದನು. 18ಆದರೆ ಒಂದು ತಲಾಂತು
ಹೊಂದಿದವನು ಹೊರಟುಹೋಗಿ ನೆಲದಲ್ಲಿ ಒಂದು ಗುಂಡಿ
ತೋಡಿ ಆ ಹಣವನ್ನು ಅಡಗಿಸಿಟ್ಟನು. 19ಬಹುಕಾಲದ ನಂತರ
ಯಜಮಾನನು ಮನೆಗೆ ಬಂದನು. ತಾನು ಕೊಟ್ಟಿದ್ದ ಹಣದ
ಕುರಿತಾಗಿ ಅವನು ಸೇವಕರನ್ನು ವಿಚಾರಿಸಿ ಲೆಕ್ಕ ಕೇಳಿದನು.
20ಐದು ತಲಾಂತು ಪಡೆದ ಸೇವಕನು ಇನ್ನೂ ಐದು ತಲಾಂತನ್ನು
ತನ್ನ ಯಜಮಾನನ ಬಳಿಗೆ ತಂದು, ‘ಧಣಿಯೇ, ನೀನು ನನ್ನಲ್ಲಿ
ಭರವಸವಿಟ್ಟು ಐದು ತಲಾಂತನ್ನು ಕೊಟ್ಟೆ, ನಾನು ಅದನ್ನು
ವಿನಿಯೋಗಿಸಿ ಇನ್ನೂ ಐದು ತಲಾಂತು ಸಂಪಾದಿಸಿದ್ದೇನೆ’
ಎಂದನು.

21“ಯಜಮಾನನು, ‘ನೀನು ನಂಬಿಗಸ್ತನಾದ ಒಳ್ಳೆಯ
ಸೇವಕ. ಆ ಸ್ವಲ್ಪ ಹಣವನ್ನು ಒಳ್ಳೆಯ ರೀತಿಯಲ್ಲಿ ಉಪ
ಯೋಗಿಸಿದೆ. ಆದ್ದರಿಂದ ನಾನು ನಿನಗೆ ಇದಕ್ಕಿಂತಲೂ ದೊಡ್ಡ
ಕೆಲಸವನ್ನು ಕೊಡುತ್ತೇನೆ. ಬಂದು ನನ್ನ ಸೌಭಾಗ್ಯದಲ್ಲಿ ಸೇರು’
ಎಂದು ಉತ್ತರಕೊಟ್ಟನು.

22“ಆಮೇಲೆ ಎರಡು ತಲಾಂತು ಹೊಂದಿದ ಸೇವಕನು
ಯಜಮಾನನ ಬಳಿಗೆ ಬಂದು, ‘ಧಣಿಯೇ, ನೀನು ನನಗೆ ಎರಡು
ತಲಾಂತು ಕೊಟ್ಟೆ, ನಾನು ಆ ಹಣವನ್ನು ಉಪಯೋಗಿಸಿ ಇನ್ನೂ
ಎರಡು ತಲಾಂತು ಸಂಪಾದಿಸಿರುವೆ’ ಅಂದನು.

23“ಯಜಮಾನನು, ‘ನೀನು ನಂಬಿಗಸ್ತನಾದ ಒಳ್ಳೆಯ
ಸೇವಕ. ನೀನು ಆ ಸ್ವಲ್ಪ ಹಣವನ್ನು ಒಳ್ಳೆಯ ರೀತಿಯಲ್ಲಿ
ಉಪಯೋಗಿಸಿದೆ. ಆದ್ದರಿಂದ ನಾನು ನಿನಗೆ ಇದಕ್ಕಿಂತಲೂ
ದೊಡ್ಡ ಕೆಲಸವನ್ನು ಕೊಡುತ್ತೇನೆ. ಬಂದು, ನನ್ನ ಸೌಭಾಗ್ಯದಲ್ಲಿ
ಸೇರು’ ಎಂದು ಉತ್ತರಕೊಟ್ಟನು.

24“ಬಳಿಕ ಒಂದು ತಲಾಂತು ಹೊಂದಿದ್ದ ಸೇವಕನು
ಯಜಮಾನನ ಬಳಿಗೆ ಬಂದು, ‘ಧಣಿಯೇ, ನೀನು ಬಹಳ ಕಠಿಣ
ಮನುಷ್ಯನು ಎಂದು ನಾನು ಬಲ್ಲೆ. ನೀನು ನೆಡದ ಕಡೆಯಲ್ಲಿ
ರಾಶಿ ಮಾಡಿಕೊಳ್ಳುವವನು ಮತ್ತು ಬೀಜ ಬಿತ್ತದ ಕಡೆಯಲ್ಲಿ
ಕೊಯ್ಯುವವನು. 25ಆದ್ದರಿಂದ ನಾನು ಹೆದರಿಕೊಂಡು ನಿನ್ನ
ಹಣವನ್ನು ಭೂಮಿಯಲ್ಲಿ ಅಡಗಿಸಿಟ್ಟೆನು. ನೀನು ನನಗೆ ಕೊಟ್ಟ
ಹಣ ಇಲ್ಲಿದೆ, ತೆಗೆದುಕೊ’ ಅಂದನು.

26“ಅದಕ್ಕೆ ಯಜಮಾನನು, ‘ನೀನು ಸೋಮಾರಿಯಾದ ಕೆಟ್ಟ
ಸೇವಕ! ನಾನು ನೆಡದ ಕಡೆಯಲ್ಲಿ ರಾಶಿ ಮಾಡಿಕೊಳ್ಳು
ವವನೆಂದು ಮತ್ತು ಬೀಜ ಬಿತ್ತದ ಕಡೆಯಲ್ಲಿ ಕೊಯ್ಯುವವ

---

**ತಲಾಂತು** ಒಂದು ತಲಾಂತು ಅಂದರೆ 30,000 ದಿನಾರಿ. ಒಂದು ದಿನಾರಿ ಅಂದರೆ ಒಬ್ಬನ ಒಂದು ದಿನದ ಸಂಬಳ.

ನೆಂದು ನಿನಗೆ ಗೊತ್ತಿತ್ತೇ? 27ಹಾಗಿದ್ದರೆ ನೀನು ನನ್ನ ಹಣವನ್ನು
ಬಡ್ಡಿಗೆ ಕೊಡಬೇಕಿತ್ತು. ಆಗ ನಾನು ಅಸಲಿನೊಡನೆ ಬಡ್ಡಿ
ಯನ್ನೂ ಪಡೆದುಕೊಳ್ಳುತ್ತಿದ್ದೆನು' ಎಂದು ಉತ್ತರಕೊಟ್ಟನು.
28‘‘ಬಳಿಕ ಯಜಮಾನನು ತನ್ನ ಬೇರೆ ಸೇವಕರಿಗೆ, ‘ಅವನ
ಒಂದು ತಲಾಂತನ್ನು ತೆಗೆದುಕೊಂಡು ಐದು ತಲಾಂತು
ಹೊಂದಿರುವ ಸೇವಕನಿಗೆ ಕೊಡಿರಿ. 29ತನ್ನಲ್ಲಿರುವುದನ್ನು ವಿನಿ
ಯೋಗಿಸುವ ಪ್ರತಿಯೊಬ್ಬನಿಗೂ ಹೆಚ್ಚಾಗಿ ಕೊಡಲ್ಪಡುವುದು,
ಆದರೆ ತನ್ನಲ್ಲಿರುವುದನ್ನು ವಿನಿಯೋಗಿಸದಿರುವ ವ್ಯಕ್ತಿಯಿಂದ
ಇದ್ದದ್ದನ್ನೂ ಕಸಿದುಕೊಳ್ಳಲಾಗುವುದು' ಎಂದು ಹೇಳಿದನು.
30ಬಳಿಕ ಆ ಯಜಮಾನನು, ‘ಕೆಲಸಕ್ಕೆ ಬಾರದ ಆ ಸೇವಕನನ್ನು
ಹೊರಗಿನ ಕಗ್ಗತ್ತಲೆಗೆ ದಬ್ಬಿರಿ' ಎಂದು ಆಜ್ಞಾಪಿಸಿದನು. ಆ
ಸ್ಥಳದಲ್ಲಿ ಜನರು ಗೋಳಾಡುತ್ತಾ ಬಾಧೆಯಿಂದ ತಮ್ಮ
ಹಲ್ಲುಗಳನ್ನು ಕಡಿಯುತ್ತಾ ಇರುವರು.'

### ಸರ್ವರಿಗೂ ಮನುಷ್ಯಕುಮಾರನು ನೀಡುವ ತೀರ್ಪು

31‘‘ಮನುಷ್ಯಕುಮಾರನು ತನ್ನ ಮಹಿಮೆಯಲ್ಲಿ ಸಮಸ್ತ
ದೇವದೂತರ ಸಮೇತ ಮತ್ತೆ ಬರುವಾಗ ರಾಜನಾಗಿ ಮಹಾ
ಸಿಂಹಾಸನದ ಮೇಲೆ ಕುಳಿತುಕೊಳ್ಳುತ್ತಾನೆ. 32ಭೂಲೋಕದ
ಜನರೆಲ್ಲರೂ ಆತನ ಮುಂದೆ ಒಟ್ಟುಗೂಡುತ್ತಾರೆ. ಕುರುಬನು
ಕುರಿಗಳನ್ನು ಆಡುಗಳಿಂದ ಪ್ರತ್ಯೇಕಿಸಿದಂತೆ ಆತನು ಅವರನ್ನು
ಬೇರ್ಪಡಿಸುವನು; 33ಮನುಷ್ಯಕುಮಾರನು ಕುರಿಗಳನ್ನು ತನ್ನ
ಬಲಗಡೆಯಲ್ಲಿಯೂ ಮತ್ತು ಆಡುಗಳನ್ನು ತನ್ನ ಎಡಗಡೆ
ಯಲ್ಲಿಯೂ ನಿಲ್ಲಿಸುವನು.
34‘‘ಆಗ ರಾಜನು ತನ್ನ ಬಲಗಡೆಯಲ್ಲಿರುವ ಜನರಿಗೆ,
‘ಬನ್ನಿರಿ, ನನ್ನ ತಂದೆ ನಿಮಗೆ ಮಹಾ ಆಶೀರ್ವಾದಗಳನ್ನು
ಕೊಟ್ಟಿದ್ದಾನೆ. ಬನ್ನಿರಿ, ದೇವರು ನಿಮಗೆ ವಾಗ್ದಾನ ಮಾಡಿದ
ರಾಜ್ಯವನ್ನು ಪಡೆದುಕೊಳ್ಳಿರಿ. ಆ ರಾಜ್ಯವು ಲೋಕ ಉಂಟಾ
ದಂದಿನಿಂದ ನಿಮಗಾಗಿ ಸಿದ್ಧಮಾಡಲ್ಪಟ್ಟಿದೆ. 35ನೀವು ಈ
ರಾಜ್ಯವನ್ನು ಪಡೆದುಕೊಳ್ಳಿರಿ. ಏಕೆಂದರೆ ನಾನು ಹಸಿದಿದ್ದೆನು,
ನೀವು ನನಗೆ ಊಟ ಕೊಟ್ಟಿರಿ. ನಾನು ಬಾಯಾರಿದ್ದೆನು, ನೀವು
ನನಗೆ ಕುಡಿಯುವುದಕ್ಕೆ ಕೊಟ್ಟಿರಿ. ನಾನು ಒಬ್ಬಂಟಿಗನಾಗಿ
ಮನೆಯಿಂದ ದೂರದಲ್ಲಿ ಇದ್ದಾಗ, ನೀವು ನನ್ನನ್ನು ನಿಮ್ಮ
ಮನೆಯೊಳಗೆ ಸೇರಿಸಿಕೊಂಡಿರಿ. 36ನಾನು ಬಟ್ಟೆಯಿಲ್ಲದವ
ನಾಗಿದ್ದೆನು. ನೀವು ನನಗೆ ಉಡುವುದಕ್ಕೆ ಕೊಟ್ಟಿರಿ. ನಾನು
ಕಾಯಿಲೆಯಲ್ಲಿ ಬಿದ್ದಿದ್ದೆನು, ನೀವು ನನಗೆ ಆರೈಕೆ ಮಾಡಿದಿರಿ.
ನಾನು ಸೆರೆಯಲ್ಲಿದ್ದೆನು, ನೀವು ನನ್ನನ್ನು ನೋಡುವುದಕ್ಕೆ
ಬಂದಿರಿ' ಎಂದು ಹೇಳುತ್ತಾನೆ.
37‘‘ಆಗ ಒಳ್ಳೆಯ ಜನರು, ‘ಪ್ರಭುವೇ, ನೀನು ಹಸಿದಿದ್ದನ್ನು
ನೋಡಿ ಯಾವಾಗ ನಿನಗೆ ಆಹಾರ ಕೊಟ್ಟೆವು? ನೀನು
ಬಾಯಾರಿದ್ದನ್ನು ನೋಡಿ ಯಾವಾಗ ಕುಡಿಯುವುದಕ್ಕೆ
ಕೊಟ್ಟೆವು? 38ನೀನು ಒಬ್ಬಂಟಿಗನಾಗಿ ಮನೆಯಿಂದ ದೂರವಾಗಿ
ಇದ್ದದ್ದನ್ನು ನೋಡಿ ಯಾವಾಗ ನಿನ್ನನ್ನು ನಮ್ಮ ಮನೆಗಳೊಳಗೆ
ಸೇರಿಸಿಕೊಂಡೆವು? ನಿನಗೆ ಬಟ್ಟೆಯಿಲ್ಲದಿರುವುದನ್ನು ನೋಡಿ
ಯಾವಾಗ ಉಡುವುದಕ್ಕೆ ಕೊಟ್ಟೆವು? 39ನೀನು ಕಾಯಿಲೆ
ಬಿದ್ದಿದ್ದನ್ನು ಅಥವಾ ಸೆರೆಯಲ್ಲಿ ಇದ್ದದ್ದನ್ನು ನೋಡಿ ಯಾವಾಗ
ನಿನ್ನನ್ನು ಆರೈಕೆ ಮಾಡಿದೆವು?' ಎಂದು ಹೇಳುವರು.
40‘‘ಆಗ ರಾಜನು, ‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನೀವು ಇಲ್ಲಿ ನನ್ನ ಜನರಿಗಾಗಿ ಏನೇನು ಮಾಡುತ್ತೀರೊ
ಅದೆಲ್ಲವನ್ನು ನನಗೂ ಮಾಡಿದಂತಾಯಿತು' ಎಂದು ಉತ್ತರ
ಕೊಡುವನು.
41‘‘ಆಮೇಲೆ ರಾಜನು ತನ್ನ ಎಡಗಡೆಯಿದ್ದ ಜನರಿಗೆ,
‘ನನ್ನಿಂದ ತೊಲಗಿಹೋಗಿರಿ, ನಿಮಗೆ ಶಿಕ್ಷೆಯಾಗಬೇಕೆಂದು
ದೇವರು ತೀರ್ಮಾನಿಸಿದ್ದಾನೆ. ಸದಾಕಾಲ ಸೈತಾನನಿಗೂ ಅವನ
ದೂತರಿಗೂ ಸಿದ್ಧಮಾಡಿರುವ ಆರದ ಬೆಂಕಿಗೆ ಬೀಳಿರಿ.
42ಏಕೆಂದರೆ ನಾನು ಹಸಿದಿದ್ದೆನು, ನೀವು ನನಗೆ ಊಟ
ಕೊಡಲಿಲ್ಲ. ನಾನು ಬಾಯಾರಿದ್ದೆನು, ನೀವು ನನಗೆ ಕುಡಿಯಲು
ಕೊಡಲಿಲ್ಲ. 43ನಾನು ಪರದೇಶಿಯಾಗಿದ್ದೆನು, ನೀವು ನನ್ನನ್ನು
ನಿಮ್ಮ ಮನೆಯೊಳಕ್ಕೆ ಸೇರಿಸಿಕೊಳ್ಳಲಿಲ್ಲ. ನಾನು ಬಟ್ಟೆಯಿಲ್ಲ
ದವನಾಗಿದ್ದೆನು, ನೀವು ನನಗೆ ಉಡುವುದಕ್ಕೆ ಕೊಡಲಿಲ್ಲ. ನಾನು
ಕಾಯಿಲೆಯಲ್ಲಿ ಬಿದ್ದಿದ್ದೆನು ಮತ್ತು ಸೆರೆಯಲ್ಲಿದ್ದೆನು, ನೀವು
ನನ್ನನ್ನು ನೋಡಿಕೊಳ್ಳಲಿಲ್ಲ' ಎಂದು ಹೇಳುವನು.
44‘‘ಅವರು, ‘ಪ್ರಭುವೇ, ನೀನು ಯಾವಾಗ ಹಸಿದಿದ್ದೆ ಮತ್ತು
ಬಾಯಾರಿದ್ದೆ? ನೀನು ಯಾವಾಗ ಆಶ್ರಯವಿಲ್ಲದವನಾಗಿದ್ದೆ?
ನಿನಗೆ ಯಾವಾಗ ಬಟ್ಟೆಯಿರಲಿಲ್ಲ? ನೀನು ಯಾವಾಗ ಕಾಯಿಲೆ
ಬಿದ್ದಿದ್ದೆ ಮತ್ತು ಸೆರೆವಾಸದಲ್ಲಿದ್ದೆ? ಇವೆಲ್ಲವನ್ನು ನಾವು
ನೋಡಿಯೂ ನಿನಗೆ ಸಹಾಯ ಮಾಡದೆ ಹೋದದ್ದು
ಯಾವಾಗ?' ಎಂದು ಉತ್ತರಿಸುವರು.
45‘‘ಆಗ ರಾಜನು, ‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನೀವು ಇಲ್ಲಿ ನನ್ನ ಜನರಿಗೆ ಏನೇನು ಮಾಡಲಿಲ್ಲವೊ ಅದನ್ನು
ನನಗೂ ಮಾಡದಂತಾಯಿತು' ಎಂದು ಉತ್ತರಕೊಡುವನು.
46‘‘ಆಗ ಕೆಟ್ಟ ಜನರು ಅಲ್ಲಿಂದ ಹೊರಟು ಹೋಗುವರು.
ಅವರಿಗೆ ನಿತ್ಯದಂಡನೆಯಾಗುವುದು. ಒಳ್ಳೆಯ ಜನರಾದರೊ
ನಿತ್ಯಜೀವವನ್ನು ಹೊಂದುವರು.''

### ಯೇಸುವನ್ನು ಕೊಲ್ಲಲು ಯೆಹೂದ್ಯ ನಾಯಕರ ಆಲೋಚನೆ

(ಮಾರ್ಕ 14:1-2; ಲೂಕ 22:1-2; ಯೋಹಾನ 11:45-53)

26 ಯೇಸು ಈ ಸಂಗತಿಗಳನ್ನೆಲ್ಲಾ ಹೇಳಿ ಮುಗಿಸಿದ
ನಂತರ, ತನ್ನ ಶಿಷ್ಯರಿಗೆ, 2‘‘ನಾಳಿದ್ದು ಪಸ್ಕಹಬ್ಬ
ವೆಂಬುದು ನಿಮಗೆ ತಿಳಿದಿದೆ. ಅಂದು ಮನುಷ್ಯಕುಮಾರನನ್ನು
ಶಿಲುಬೆಗೇರಿಸಲು ವೈರಿಗಳಿಗೆ ಒಪ್ಪಿಸುವರು'' ಎಂದನು.
3ಇತ್ತ ಮಹಾಯಾಜಕರು ಮತ್ತು ಹಿರಿಯ ಯೆಹೂದ್ಯ
ನಾಯಕರು, ಪ್ರಧಾನಯಾಜಕನ ಭವನದಲ್ಲಿ ಸಭೆಸೇರಿದರು.
ಪ್ರಧಾನಯಾಜಕನ ಹೆಸರು ಕಾಯಫ. 4ಆ ಸಭೆಯಲ್ಲಿ ಅವರು
ಯೇಸುವನ್ನು ಉಪಾಯದಿಂದ ಬಂಧಿಸಿ ಕೊಲ್ಲಲು
ಸಮಾಲೋಚಿಸಿದರು. 5ಆದರೆ ಸಭಿಕರು, ‘‘ನಾವು ಪಸ್ಕಹಬ್ಬದ
ಕಾಲದಲ್ಲಿ ಯೇಸುವನ್ನು ಬಂಧಿಸಲು ಸಾಧ್ಯವಿಲ್ಲ. ಏಕೆಂದರೆ
ಜನರು ಕೋಪಗೊಂಡು ದಂಗೆ ಏಳಬಹುದು'' ಎಂದು
ಹೇಳಿದರು.

### ಸ್ತ್ರೀಯೊಬ್ಬಳು ಮಾಡಿದ ವಿಶೇಷ ಕಾರ್ಯ

(ಮಾರ್ಕ 14:9; ಯೋಹಾನ 12:1-8)

6ಯೇಸು ಬೆಥಾನಿಯಲ್ಲಿದ್ದಾಗ ಸಿಮೋನ ಎಂಬ ಕುಷ್ಠ
ರೋಗಿಯ ಮನೆಯಲ್ಲಿದ್ದನು. 7ಆಗ ಸ್ತ್ರೀಯೊಬ್ಬಳು ಬಹು

ಬೆಲೆಬಾಳುವ ಸುಗಂಧತೈಲದ ಭರಣಿಯನ್ನು* ತೆಗೆದು
ಕೊಂಡು ಬಂದು ಊಟಕ್ಕೆ ಕುಳಿತ್ತಿದ್ದ ಯೇಸುವಿನ ತಲೆಯ
ಮೇಲೆ ಆ ಸುಗಂಧ ತೈಲವನ್ನು ಸುರಿದಳು.
8ಇದನ್ನು ನೋಡಿದ ಶಿಷ್ಯರು ಆ ಸ್ತ್ರೀಯ ಮೇಲೆ
ಕೋಪಗೊಂಡು, ‘‘ಆ ಸುಗಂಧ ತೈಲವನ್ನು ಏಕೆ ಹಾಳು
ಮಾಡಿದೆ? 9ಅದನ್ನು ಬಹಳ ಹಣಕ್ಕೆ ಮಾರಿ ಬಡ ಜನರಿಗೆ
ಕೊಡಬಹುದಾಗಿತ್ತಲ್ಲಾ’’ ಎಂದರು.
10ಆದರೆ ಈ ಘಟನೆಗೆ ಕಾರಣವನ್ನು ತಿಳಿದಿದ್ದ ಯೇಸು ತನ್ನ
ಶಿಷ್ಯರಿಗೆ, ‘‘ಈ ಸ್ತ್ರೀಗೆ ಏಕೆ ತೊಂದರೆ ಕೊಡುತ್ತೀರಿ? ಆಕೆಯು
ನನಗೆ ಬಹಳ ಒಳ್ಳೆಯ ಕಾರ್ಯವನ್ನು ಮಾಡಿದಳು.
11ಬಡಜನರು ನಿಮ್ಮೊಂದಿಗೆ ಯಾವಾಗಲೂ ಇರುತ್ತಾರೆ. ಆದರೆ
ನಾನು ನಿಮ್ಮೊಂದಿಗೆ ಯಾವಾಗಲೂ ಇರುವುದಿಲ್ಲ. 12ನಾನು ಸತ್ತ
ನಂತರ ನನ್ನನ್ನು ಸಮಾಧಿಗೆ ಸಿದ್ಧಪಡಿಸುವುದಕ್ಕಾಗಿ ಈ ಸ್ತ್ರೀಯು
ನನ್ನ ದೇಹದ ಮೇಲೆ ಸುಗಂಧ ತೈಲವನ್ನು ಸುರಿದಳು. 13ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ಪ್ರಪಂಚದಾದ್ಯಂತ ಎಲ್ಲೆಲ್ಲಿ
ಸುವಾರ್ತೆಯನ್ನು ತಿಳಿಸಲಾಗುವುದೋ ಅಲ್ಲೆಲ್ಲಾ ಈ ಕಾರ್ಯ
ವನ್ನು ಈಕೆಯ ನೆನಪಿಗಾಗಿ ತಿಳಿಸಲಾಗುವುದು’’ ಎಂದು
ಹೇಳಿದನು.

### ಯೇಸುವಿನ ಶತ್ರು ಯೂದ

(ಮಾರ್ಕ 14:10-11; ಲೂಕ 22:3-6)

14ನಂತರ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ
ಇಸ್ಕರಿಯೋತ ಯೂದನು ಮಹಾಯಾಜಕರ ಬಳಿಗೆ ಹೋಗಿ,
15‘‘ಯೇಸುವನ್ನು ನಿಮಗೆ ಹಿಡಿದುಕೊಟ್ಟರೆ ನೀವು ನನಗೆ ಎಷ್ಟು
ಹಣ ಕೊಡುವಿರಿ?’’ ಎಂದು ಕೇಳಿದನು. ಮಹಾಯಾಜಕರು
ಮೂವತ್ತು ಬೆಳ್ಳಿಯ ನಾಣ್ಯಗಳನ್ನು ಯೂದನಿಗೆ ಕೊಟ್ಟರು.
16ಅಂದಿನಿಂದ ಯೇಸುವನ್ನು ಹಿಡಿದುಕೊಡಲು ಯೂದನು
ಸಮಯ ಕಾಯುತ್ತಿದ್ದನು.

### ಪಸ್ಕಹಬ್ಬದ ಆಚರಣೆಗೆ ಸಿದ್ಧತೆ

(ಮಾರ್ಕ 14:21-22; ಲೂಕ 22:7-14; 21-23
ಯೋಹಾನ 13:21-30)

17ಹುಳಿಯಿಲ್ಲದ ರೊಟ್ಟಿಯ ಹಬ್ಬದ ಮೊದಲನೆಯ
ದಿನದಂದು ಶಿಷ್ಯರು ಯೇಸುವಿನ ಬಳಿಗೆ ಬಂದು, ‘‘ನಾವು
ನಿನಗಾಗಿ ಪಸ್ಕಹಬ್ಬದ ಊಟವನ್ನು ಎಲ್ಲಿ ಸಿದ್ಧಪಡಿಸಬೇಕು?’’
ಎಂದು ಕೇಳಿದರು.
18ಅದಕ್ಕೆ ಯೇಸು, ‘‘ನೀವು ನಗರಕ್ಕೆ ಹೋಗಿ ನಾನು
ಸೂಚಿಸುವ ವ್ಯಕ್ತಿಯನ್ನು ಭೇಟಿಮಾಡಿ ಅವನಿಗೆ, ‘ಆರಿಸಿಕೊಂಡ
ಸಮಯ ಸಮೀಪಿಸಿತು. ನಾನು ಪಸ್ಕಹಬ್ಬದ ಊಟವನ್ನು ನಿನ್ನ
ಮನೆಯಲ್ಲಿ ನನ್ನ ಶಿಷ್ಯರೊಂದಿಗೆ ಮಾಡುತ್ತೇನೆ ಎಂದು
ಉಪದೇಶಕನು ಹೇಳುತ್ತಾನೆ’ ಎಂಬುದಾಗಿ ತಿಳಿಸಿರಿ’’ ಎಂದು
ಉತ್ತರಕೊಟ್ಟನು. 19ಯೇಸು ಹೇಳಿದಂತೆಯೇ ಶಿಷ್ಯರು ಮಾಡಿ
ಪಸ್ಕಹಬ್ಬದ ಊಟವನ್ನು ಏರ್ಪಡಿಸಿದರು.
20ಸಾಯಂಕಾಲದಲ್ಲಿ ಯೇಸು ತನ್ನ ಹನ್ನೆರಡು ಮಂದಿ
ಶಿಷ್ಯರೊಂದಿಗೆ ಊಟಕ್ಕೆ ಕುಳಿತಿದ್ದನು. 21ಅವರೆಲ್ಲರೂ ಊಟ
ಮಾಡುತ್ತಿದ್ದಾಗ ಯೇಸು, ‘‘ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ಇಲ್ಲಿರುವ ಹನ್ನೆರಡು ಮಂದಿಯಲ್ಲಿ ಒಬ್ಬನು
ನನ್ನನ್ನು ವೈರಿಗಳಿಗೆ ಒಪ್ಪಿಸುತ್ತಾನೆ’’ ಎಂದು ಹೇಳಿದನು.
22ಶಿಷ್ಯರು ಇದನ್ನು ಕೇಳಿ ಬಹಳ ದುಃಖಪಟ್ಟರು. ಪ್ರತಿಯೊಬ್ಬ
ಶಿಷ್ಯನು ಯೇಸುವಿಗೆ, ‘‘ಪ್ರಭುವೇ, ನಿಜವಾಗಿಯೂ ನಾನಲ್ಲ!
ಎಂದು ಹೇಳಿದರು.
23ಯೇಸು, ‘‘ಬಟ್ಟಲಲ್ಲಿ ನನ್ನ ಸಂಗಡ ತನ್ನ ಕೈಗಳನ್ನು
ಅದ್ದುವವನೇ, ನನಗೆ ವಿರೋಧವಾಗಿದ್ದಾನೆ. 24ಪವಿತ್ರ ಗ್ರಂಥ
ದಲ್ಲಿ ಬರೆದಿರುವ ಪ್ರಕಾರ ಮನುಷ್ಯಕುಮಾರನು ಹೊರಟು
ಹೋಗಿ ಮರಣ ಹೊಂದುತ್ತಾನೆ. ಆದರೆ ಆತನನ್ನು ಕೊಲ್ಲಲು
ಒಪ್ಪಿಸುವವನಿಗೆ ಬಹಳ ಕೇಡಾಗುತ್ತದೆ. ಅವನು ಹುಟ್ಟದೆ
ಇದ್ದಿದ್ದರೆ ಎಷ್ಟೋ ಚೆನ್ನಾಗಿತ್ತು!’’ಎಂದು ಹೇಳಿದನು.
25ಆಗ, ಯೇಸುವನ್ನು ಆತನ ಶತ್ರುಗಳಿಗೆ ಒಪ್ಪಿಸಿಕೊಡಲಿದ್ದ
ಯೂದನು, ‘‘ಗುರುವೇ, ನಿನಗೆ ವಿರೋಧವಾಗಿರುವವನು
ನಾನಲ್ಲ ತಾನೇ?’’ ಎಂದನು. ಅದಕ್ಕೆ ಯೇಸು, ‘‘ಹೌದು,
ಅವನು ನೀನೇ?’’ಎಂದು ಉತ್ತರಿಸಿದನು.

### ಪ್ರಭುವಿನ ಭೋಜನ

(ಮಾರ್ಕ 14:22-26; 22:15-20; 1 ಕೊರಿಂಥ 11:23-25)

26ಅವರು ಊಟಮಾಡುತ್ತಿದ್ದಾಗ, ಯೇಸು ರೊಟ್ಟಿಯನ್ನು
ತೆಗೆದುಕೊಂಡು ಅದಕ್ಕಾಗಿ ದೇವರಿಗೆ ಸ್ತೋತ್ರ ಸಲ್ಲಿಸಿ, ಅದನ್ನು
ಮುರಿದು, ‘‘ತೆಗೆದುಕೊಳ್ಳಿರಿ, ತಿನ್ನಿರಿ, ಇದು ನನ್ನ ದೇಹ’’ ಎಂದು
ಹೇಳಿ ತನ್ನ ಶಿಷ್ಯರಿಗೆ ಕೊಟ್ಟನು.
27ನಂತರ ಯೇಸು ದ್ರಾಕ್ಷಾರಸದ ಪಾತ್ರೆಯನ್ನು ತೆಗೆದು
ಕೊಂಡು ಅದಕ್ಕಾಗಿ ದೇವರಿಗೆ ಸ್ತೋತ್ರಸಲ್ಲಿಸಿ, ‘‘ನೀವೆಲ್ಲರೂ
ಇದನ್ನು ಕುಡಿಯಿರಿ. 28ಇದು ಹೊಸ ಒಡಂಬಡಿಕೆಯನ್ನು
ಸ್ಥಾಪಿಸುವ ನನ್ನ ರಕ್ತ. ಇದು ಅನೇಕ ಜನರ ಪಾಪಗಳ ಕ್ಷಮೆಗಾಗಿ
ಸುರಿಸಲ್ಪಡುವ ರಕ್ತ. 29ನಾವು ನಮ್ಮ ತಂದೆಯ ರಾಜ್ಯದಲ್ಲಿ ಮತ್ತೆ
ಒಟ್ಟಾಗಿ ಸೇರಿ ದ್ರಾಕ್ಷಾರಸವನ್ನು ಹೊಸದಾಗಿ ಕುಡಿಯುವ ತನಕ
ಅದನ್ನು ಇನ್ನು ಕುಡಿಯುವುದೇ ಇಲ್ಲ’’ ಎಂದು ಹೇಳಿ ಜನರಿಗೆ
ಕುಡಿಯಲು ಕೊಟ್ಟನು.
30ಆಗ ಶಿಷ್ಯರೆಲ್ಲರೂ ಪಸ್ಕಹಬ್ಬದ ಹಾಡನ್ನು ಹಾಡಿದರು.
ಬಳಿಕ ಅವರು ಆಲಿವ್ ಗುಡ್ಡಕ್ಕೆ ಹೋದರು.

### ಶಿಷ್ಯರ ವಿಶ್ವಾಸದ್ರೋಹದ ಮುನ್ಸೂಚನೆ

(ಮಾರ್ಕ 14:27-31; ಲೂಕ 22:31-34; ಯೋಹಾನ 13:36-38)

31ಆಗ ಯೇಸು ತನ್ನ ಶಿಷ್ಯರಿಗೆ, ‘‘ಇಂದು ರಾತ್ರಿ ನೀವೆಲ್ಲರೂ
ನನ್ನ ದೆಸೆಯಿಂದ ನಿಮ್ಮ ವಿಶ್ವಾಸವನ್ನು ಕಳೆದುಕೊಳ್ಳುವಿರಿ.

> ‘ನಾನು ಕುರುಬನನ್ನು ಕೊಲ್ಲುವೆನು, ಆಗ ಕುರಿ
> ಗಳೆಲ್ಲಾ ಚದರಿಹೋಗುತ್ತವೆ.’
>
> *ಜೆಕರ್ಯ 13:7*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.
32‘‘ಆದರೆ ನಾನು ಸತ್ತ ಮೇಲೆ ಜೀವಂತನಾಗಿ ಎದ್ದು
ಬರುವೆನು. ನಂತರ ನಾನು ಗಲಿಲೇಯಕ್ಕೆ ಹೋಗುವೆನು. ನೀವು
ಅಲ್ಲಿಗೆ ಹೋಗುವುದಕ್ಕಿಂತ ಮುಂಚೆಯೇ ನಾನು ಅಲ್ಲಿರುವೆನು’’
ಎಂದು ಹೇಳಿದನು.

---

**ಭರಣಿ** ಮೂಲ ಚಂದ್ರಕಾಂತಶಿಲೆಯ ಭರಣಿ.

33ಪೇತ್ರನು, ‘‘ಉಳಿದ ಶಿಷ್ಯರೆಲ್ಲರೂ ನಿನ್ನ ದೆಸೆಯಿಂದ ತಮ್ಮ ವಿಶ್ವಾಸವನ್ನು ಕಳೆದುಕೊಳ್ಳಬಹುದು. ಆದರೆ ನಾನು ಮಾತ್ರ ಹಾಗೆ ಮಾಡುವುದಿಲ್ಲ’’ ಎಂದು ಉತ್ತರ ಕೊಟ್ಟನು.

34ಯೇಸು, ‘‘ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ಇಂದು ರಾತ್ರಿ ಕೋಳಿ ಕೂಗುವುದಕ್ಕಿಂತ ಮೊದಲು ನೀನು ನನ್ನ ವಿಷಯದಲ್ಲಿ ಆತನು ನನಗೆ ಗೊತ್ತೇ ಇಲ್ಲ ಎಂಬುದಾಗಿ ಮೂರು ಸಲ ಹೇಳುವೆ’’ ಅಂದನು. 35ಆದರೆ ಪೇತ್ರನು, ‘‘ನಾನು ನಿನ್ನೊಂದಿಗೆ ಸತ್ತರೂ ಸರಿ, ನಿನ್ನನ್ನು ನಿರಾಕರಿಸುವುದಿಲ್ಲ’’ ಅಂದನು. ಉಳಿದ ಶಿಷ್ಯರು ಸಹ ಅದೇ ರೀತಿ ಹೇಳಿದರು.

36ಅನಂತರ ಯೇಸು ತನ್ನ ಶಿಷ್ಯರೊಂದಿಗೆ ಗೆತ್ಸೆಮನೆ ಎಂಬ ಸ್ಥಳಕ್ಕೆ ಹೋದನು. ಯೇಸು ತನ್ನ ಶಿಷ್ಯರಿಗೆ, ‘‘ನಾನು ಅಲ್ಲಿಗೆ ಹೋಗಿ, ಪ್ರಾರ್ಥಿಸಿ ಬರುವತನಕ ಇಲ್ಲಿಯೇ ಇರಿ’ ಎಂದು ಹೇಳಿದನು. 37ಯೇಸುವು ಪೇತ್ರನನ್ನು ಮತ್ತು ಜೆಬೆದಾಯನ ಇಬ್ಬರು ಮಕ್ಕಳನ್ನು ತನ್ನೊಂದಿಗೆ ಕರೆದುಕೊಂಡು ಹೋದನು. ಆಗ ಯೇಸು ಬಹಳ ದುಃಖದಿಂದ ಮನಗುಂದಿದವನಾಗಿ 38ಅವರಿಗೆ, ನನ್ನ ಆತ್ಮವು ದುಃಖದಿಂದ ತುಂಬಿಹೋಗಿದೆ. ನನ್ನ ಹೃದಯವು ದುಃಖದಿಂದ ಒಡೆದುಹೋಗುವಂತಿದೆ. ನೀವು ನನ್ನೊಂದಿಗೆ ಎಚ್ಚರವಾಗಿದ್ದು ಇಲ್ಲೇ ಇರಿ’’ ಎಂದು ಹೇಳಿದನು.

39ಬಳಿಕ ಯೇಸು ಅವರಿಂದ ಸ್ವಲ್ಪದೂರ ಹೋಗಿ ನೆಲದ ಮೇಲೆ ಬೋರಲಬಿದ್ದು, ‘‘ನನ್ನ ತಂದೆಯೇ, ಸಾಧ್ಯವಿದ್ದರೆ, ಸಂಕಟದ ಈ ಪಾತ್ರೆಯನ್ನು * ನನಗೆ ಕೊಡಬೇಡ. ಆದರೆ ನನ್ನ ಇಷ್ಟದಂತಲ್ಲ. ನಿನ್ನ ಇಷ್ಟದಂತೆಯೇ ಮಾಡು’’ ಎಂದು ಪ್ರಾರ್ಥಿಸಿದನು. 40ನಂತರ ಯೇಸು ತನ್ನ ಶಿಷ್ಯರ ಬಳಿಗೆ ಹಿಂತಿರುಗಿದನು. ಅವರು ನಿದ್ರಿಸುತ್ತಿರುವುದನ್ನು ಕಂಡು ಆತನು ಪೇತ್ರನಿಗೆ, ‘‘ನೀವು ನನ್ನೊಂದಿಗೆ ಒಂದು ಗಂಟೆಯ ಕಾಲ ಎಚ್ಚರವಾಗಿರಲು ಸಾಧ್ಯವಿಲ್ಲವೇ? 41ನೀವು ಶೋಧನೆಗೆ ಒಳಗಾಗದಂತೆ ಎಚ್ಚರವಾಗಿದ್ದು ಪ್ರಾರ್ಥಿಸಿರಿ. ಮನಸ್ಸೇನೊ ಸಿದ್ಧವಾಗಿದೆ ಆದರೆ ದೇಹಕ್ಕೆ ಬಲ ಸಾಲದು’’ ಎಂದು ಹೇಳಿದನು.

42ಯೇಸು ಎರಡನೆ ಸಲ ಸ್ವಲ್ಪದೂರ ಹೋಗಿ ಪ್ರಾರ್ಥಿಸುತ್ತಾ ‘‘ನನ್ನ ತಂದೆಯೇ, ಸಂಕಟದ ಈ ಪಾತ್ರೆಯನ್ನು ನನ್ನಿಂದ ತೆಗೆದುಕೊಳ್ಳಲು ಸಾಧ್ಯವಿಲ್ಲದಿದ್ದರೆ ಮತ್ತು ನಾನು ಅದನ್ನು ನೆರವೇರಿಸಲೇಬೇಕಿದ್ದರೆ, ನಿನ್ನ ಇಷ್ಟದಂತೆಯೇ ಆಗಲಿ’’ ಎಂದನು. 43ನಂತರ ಯೇಸು ತನ್ನ ಶಿಷ್ಯರ ಬಳಿಗೆ ಹಿಂತಿರುಗಿದಾಗ ಅವರು ಮತ್ತೆ ನಿದ್ರೆ ಮಾಡುತ್ತಿರುವುದನ್ನು ಕಂಡನು. ಅವರ ಕಣ್ಣುಗಳು ಬಹಳ ಆಯಾಸಗೊಂಡಿದ್ದವು. 44ಆದ್ದರಿಂದ ಯೇಸು ಮತ್ತೊಮ್ಮೆ ಅವರನ್ನು ಬಿಟ್ಟು ಸ್ವಲ್ಪದೂರ ಹೋಗಿ ಮೂರನೆ ಸಲ ಅದೇ ರೀತಿ ಪ್ರಾರ್ಥಿಸಿದನು.

45ಬಳಿಕ ಯೇಸು ತನ್ನ ಶಿಷ್ಯರ ಬಳಿಗೆ ಹಿಂದಿರುಗಿ, ‘‘ನೀವು ಇನ್ನೂ ನಿದ್ರೆ ಮಾಡುತ್ತಾ ವಿಶ್ರಾಂತಿ ತೆಗೆದುಕೊಳ್ಳುತ್ತಿದ್ದೀರಾ? ಪಾಪಿಷ್ಠರಾದ ಜನರಿಗೆ ಮನುಷ್ಯಕುಮಾರನನ್ನು ಒಪ್ಪಿಸುವ ಕಾಲ ಸಮೀಪಿಸಿದೆ. 46ನಾವು ಹೋಗಬೇಕು. ಎದ್ದೇಳಿ! ನನ್ನನ್ನು ವೈರಿಗಳಿಗೆ ಒಪ್ಪಿಸುವ ಮನುಷ್ಯನು ಇಲ್ಲಿಯೇ ಬರುತ್ತಿದ್ದಾನೆ’’ ಎಂದು ಹೇಳಿದನು.

### ಯೇಸುವಿನ ಬಂಧನ

(ಮಾರ್ಕ 14:43-50; ಲೂಕ 22:47-53; ಯೋಹಾನ 18:3-12)

47ಯೇಸು ಮಾತಾಡುತ್ತಿರುವಷ್ಟರಲ್ಲೇ ಯೂದನು ಅಲ್ಲಿಗೆ ಬಂದನು. ಯೂದನು ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾಗಿದ್ದನು. ಮಹಾಯಾಜಕರು ಮತ್ತು ಹಿರಿಯ ನಾಯಕರು ಕಳುಹಿಸಿದ್ದ ಅನೇಕ ಜನರು ಅವನೊಂದಿಗಿದ್ದರು. ಅವರು ಕತ್ತಿ ಮತ್ತು ದೊಣ್ಣೆಗಳನ್ನು ಹಿಡಿದುಕೊಂಡಿದ್ದರು. 48ಯೇಸು ಯಾರೆಂಬುದನ್ನು ತಿಳಿದುಕೊಳ್ಳಲು ಯೂದನು ಅವರಿಗೆ ಒಂದು ಗುರುತು ಹೇಳಿಕೊಟ್ಟಿದ್ದನು. 49ಅಂತೆಯೇ ಯೂದನು ಯೇಸುವಿನ ಬಳಿಗೆ ಹೋಗಿ, ‘‘ಗುರುವೇ, ನಮಸ್ಕಾರ’’ ಎಂದು ಹೇಳಿ ಆತನಿಗೆ ಮುದ್ದಿಟ್ಟನು.

50ಆಗ ಯೇಸು, ‘‘ಸ್ನೇಹಿತನೇ, ನೀನು ಮಾಡಲು ಬಂದ ಕೆಲಸ ಇದೆಯೋ?’’ ಎಂದನು. ಕೂಡಲೇ ಆ ಜನರು ಬಂದು ಯೇಸುವನ್ನು ಹಿಡಿದು, ಬಂಧಿಸಿದರು. 51ಆಗ ಯೇಸುವಿನ ಶಿಷ್ಯರಲ್ಲೊಬ್ಬನು ತನ್ನ ಖಡ್ಗವನ್ನು ಹೊರಕ್ಕೆ ಸೆಳೆದು ಮಹಾಯಾಜಕನ ಸೇವಕನಿಗೆ ಹೊಡೆದು ಅವನ ಕಿವಿಯನ್ನು ಕತ್ತರಿಸಿಬಿಟ್ಟನು.

52ಯೇಸು ಅವನಿಗೆ, ‘‘ನಿನ್ನ ಖಡ್ಗವನ್ನು ಒರೆಗೆ ಹಾಕು. ಕತ್ತಿಯನ್ನು ಬಳಸುವ ಜನರು ಕತ್ತಿಯಿಂದಲೇ ಸಾಯುತ್ತಾರೆ. 53ನಾನು ನನ್ನ ತಂದೆಯನ್ನು ಕೇಳಿದ್ದರೆ, ಆತನು ನನಗೆ ದೇವದೂತರ ಹನ್ನೆರಡು ಸೇನಾದಳಗಳನ್ನು ನೀಡುತ್ತಿದ್ದನೆಂಬುದು ನಿನಗೆ ಗೊತ್ತೇ ಇದೆ. 54ಆದರೆ ಪವಿತ್ರ ಗ್ರಂಥದಲ್ಲಿ ಬರೆದಿರುವಂತೆ ಇದು ಈ ರೀತಿಯಲ್ಲೇ ಆಗಬೇಕಾಗಿದೆ’’ ಎಂದು ಹೇಳಿದನು.

55ನಂತರ ಯೇಸು ಆ ಜನರಿಗೆ, ‘‘ನೀವು ಅಪರಾಧಿಯನ್ನು ಬಂಧಿಸುವವರಂತೆ ಕತ್ತಿ ಮತ್ತು ದೊಣ್ಣೆಗಳನ್ನು ಹಿಡಿದುಕೊಂಡು ಇಲ್ಲಿಗೆ ಬಂದಿದ್ದೀರಿ. ನಾನು ಪ್ರತಿದಿನವೂ ದೇವಾಲಯದಲ್ಲಿ ಕುಳಿತುಕೊಂಡು ಬೋಧಿಸುತ್ತಿದ್ದಾಗ ನೀವು ನನ್ನನ್ನು ಅಲ್ಲಿ ಬಂಧಿಸಲೇ ಇಲ್ಲ. 56ಆದರೆ ಪ್ರವಾದಿಗಳು ಬರೆದಿರುವುದೆಲ್ಲಾ ನೆರವೇರುವುದಕ್ಕಾಗಿ ಇದೆಲ್ಲಾ ಆಯಿತು’’ ಎಂದು ಹೇಳಿದನು. ಆಗ ಶಿಷ್ಯರೆಲ್ಲರೂ ಆತನನ್ನು ಬಿಟ್ಟು ಓಡಿಹೋದನು.

### ಯೆಹೂದ್ಯ ನಾಯಕರ ಎದುರಿನಲ್ಲಿ ಯೇಸು

(ಮಾರ್ಕ 14:53-65; ಲೂಕ 22:54-55, 63-71; ಯೋಹಾನ 18:13-14,19-24)

57ಬಳಿಕ ಯೇಸುವನ್ನು ಬಂಧಿಸಿದ್ದವರು ಆತನನ್ನು ಪ್ರಧಾನಯಾಜಕನಾದ ಕಾಯಫನ ಮನೆಗೆ ಕರೆದೊಯ್ದರು. ಅಲ್ಲಿ ಧರ್ಮೋಪದೇಶಕರು ಮತ್ತು ಯೆಹೂದ್ಯರ ಹಿರಿಯ ನಾಯಕರು ಒಟ್ಟಿಗೆ ಸೇರಿದ್ದರು. 58ಯೇಸುವಿಗೆ ಏನಾಗುತ್ತದೊ ಎಂಬುದನ್ನು ನೋಡಲು ಪೇತ್ರನು ಆತನನ್ನು ದೂರದಿಂದ ಹಿಂಬಾಲಿಸುತ್ತಾ ಪ್ರಧಾನಯಾಜಕನ ಭವನದ ಅಂಗಳದೊಳಗೆ ಬಂದು ಕಾವಲುಗಾರರೊಂದಿಗೆ ಕುಳಿತುಕೊಂಡನು.

59ಮಹಾಯಾಜಕರು ಮತ್ತು ಯೆಹೂದ್ಯರ ಸಮಿತಿಯವರು ಯೇಸುವಿಗೆ ಮರಣದಂಡನೆ ವಿಧಿಸಲು ಅಗತ್ಯವಾದ ಸುಳ್ಳುಸಾಕ್ಷಿಗಳನ್ನು ಹುಡುಕಿದರು. 60ಅನೇಕರು ಬಂದು, ಯೇಸುವಿನ ವಿಷಯವಾಗಿ ಸುಳ್ಳು ಸಂಗತಿಗಳನ್ನು ಹೇಳಿದರು. ಆದರೆ ಯೇಸವನ್ನು ಕೊಲ್ಲಲು ಬಲವಾದ ಕಾರಣವೊಂದೂ ಸಮಿತಿಗೆ ಸಿಗಲಿಲ್ಲ. ಆಗ ಇಬ್ಬರು ಬಂದು, 61‘‘ಈ ಮನುಷ್ಯನು, ‘ನಾನು ದೇವರ ಆಲಯವನ್ನು ಕೆಡವಿ ಅದನ್ನು ಮತ್ತೆ ಮೂರು ದಿನಗಳಲ್ಲಿ

---

**ಸಂಕಟದ ಪಾತ್ರೆ** ತನಗೆ ಸಂಭವಿಸಲಿರುವ ಕೆಟ್ಟ ಸಂಗತಿಗಳನ್ನು ಕುರಿತು ಹೇಳುತ್ತಿದ್ದಾನೆ. ಕಹಿಯಾದ ಪಾನೀಯವನ್ನು ಒಂದು ಲೋಟ ಪೂರ್ತಿ ಕುಡಿಯುವುದು ಎಷ್ಟು ಕಷ್ಟವೊ ಈ ಸಂಗತಿಗಳನ್ನು ಒಪ್ಪಿಕೊಳ್ಳುವುದೂ ಅಷ್ಟೇ ಕಷ್ಟಕರ.

ನಿರ್ಮಿಸುತ್ತೇನೆ’ ಎಂದು ಹೇಳಿದನು’’ ಎಂಬುದಾಗಿ ತಿಳಿಸಿದರು.
62ಪ್ರಧಾನಯಾಜಕನು ಎದ್ದುನಿಂತು ಯೇಸುವಿಗೆ, ‘‘ಈ ಜನರು
ನಿನ್ನ ಮೇಲೆ ಹೊರಿಸಿರುವ ಆಪಾದನೆಗಳ ಬಗ್ಗೆ ನೀನು
ಏನಾದರೂ ಹೇಳಬೇಕೆಂದಿರುವೆಯಾ? ಇವರು ಹೇಳುತ್ತಿರು
ವುದೆಲ್ಲಾ ನಿಜವೇ?’’ ಎಂದು ಕೇಳಿದನು. 63ಆದರೆ ಯೇಸು
ಮೌನವಾಗಿದ್ದನು.

ಪ್ರಧಾನಯಾಜಕನು ಮತ್ತೆ ಯೇಸುವಿಗೆ, ‘‘ಜೀವಸ್ವರೂಪ
ನಾದ ದೇವರ ಮೇಲೆ ಆಣೆಯಿಟ್ಟು ಕೇಳುತ್ತಿದ್ದೇನೆ, ನೀನು
ದೇವಕುಮಾರನಾದ ಕ್ರಿಸ್ತನೋ? ನಮಗೆ ತಿಳಿಸು ’’ ಎಂದನು.

64ಯೇಸು, ‘‘ಹೌದು, ನೀನು ಹೇಳಿದಂತೆ ಆತನೇ ನಾನು.
ಆದರೆ ನಾನು ನಿನಗೆ ಹೇಳುವುದೇನೆಂದರೆ, ಇನ್ನು ಮೇಲೆ
ಮನುಷ್ಯಕುಮಾರನು ದೇವರ ಬಲಗಡೆಯಲ್ಲಿ ಕುಳಿತಿರು
ವುದನ್ನೂ ಆಕಾಶದ ಮೋಡಗಳ ಮೇಲೆ ಕುಳಿತುಬರುವುದನ್ನೂ
ನೀವು ಕಾಣುವಿರಿ’’ ಎಂದು ಹೇಳಿದನು. 65ಪ್ರಧಾನಯಾಜಕನು
ಇದನ್ನು ಕೇಳಿ ಬಹಳ ಕೋಪಗೊಂಡು ತನ್ನ ಬಟ್ಟೆಗಳನ್ನು ಹರಿದು
ಕೊಂಡು, ‘‘ಈ ಮನುಷ್ಯನು ದೇವದೂಷಣೆ ಮಾಡಿದ್ದಾನೆ.
ನಮಗೆ ಇನ್ನು ಯಾವ ಸಾಕ್ಷಿಗಳ ಅಗತ್ಯವೂ ಇಲ್ಲ. ಇವನು
ಮಾಡಿದ ದೇವದೂಷಣೆಯನ್ನು ನೀವೇ ಕೇಳಿದಿರಿ. 66ನಿಮ್ಮ
ತೀರ್ಮಾನವೇನು?’’ ಎಂದು ಕೇಳಿದನು.

ಯೆಹೂದ್ಯರು, ‘‘ಇವನು ಅಪರಾಧಿ. ಇವನು ಸಾಯಲೇ
ಬೇಕು’’ ಎಂದು ಉತ್ತರ ಕೊಟ್ಟರು.

67ನಂತರ ಜನರು ಅಲ್ಲಿಯೇ ಯೇಸುವಿನ ಮುಖದ ಮೇಲೆ
ಉಗುಳಿದರು. ಮುಷ್ಟಿಯಿಂದ ಆತನನ್ನು ಗುದ್ದಿದ್ದರು. ಆತನ
ಕೆನ್ನೆಗೆ ಬಾರಿಸಿದರು. 68ಅವರು ‘‘ಕ್ರಿಸ್ತನೇ, ನಮಗೆ ಪ್ರವಾದನೆ
ಹೇಳು! ನಿನಗೆ ಹೊಡೆದವರ್ಯಾರು?’’ ಎಂದು ಅಪಹಾಸ್ಯ
ಮಾಡಿದರು.

## ಪೇತ್ರನ ವಿಶ್ವಾಸದ್ರೋಹ

(ಮಾರ್ಕ 14:66-72; ಲೂಕ 22:56-62;
ಯೋಹಾನ 18:15-18, 25-27)

69ಇತ್ತ ಪೇತ್ರನು ಅಂಗಳದಲ್ಲಿ ಕುಳಿತಿದ್ದನು. ಸೇವಕಿ
ಯೊಬ್ಬಳು ಪೇತ್ರನ ಬಳಿಗೆ ಬಂದು, ‘‘ನೀನು ಸಹ ಗಲಿಲಾಯದ
ಯೇಸುವಿನೊಂದಿಗಿದ್ದವನು’’ ಎಂದು ಹೇಳಿದಳು. 70ಆದರೆ
ಪೇತ್ರನು, ಅಲ್ಲಿದ್ದ ಜನರೆಲ್ಲರ ಎದುರಿನಲ್ಲಿ ಆಕೆಗೆ, ‘‘ನೀನು ಏನು
ಹೇಳುತ್ತಿರುವೆಯೊ ನನಗೆ ಗೊತ್ತೇ ಇಲ್ಲ’’ ಎಂದು
ನಿರಾಕರಿಸಿದನು.

71ಬಳಿಕ ಪೇತ್ರನು ಅಲ್ಲಿಂದ ಎದ್ದು ಹೆಬ್ಬಾಗಿಲ ಬಳಿಗೆ
ಬಂದಾಗ ಮತ್ತೊಬ್ಬ ಸೇವಕಿಯು ಅವನನ್ನು ನೋಡಿ ಅಲ್ಲಿದ್ದ
ಜನರಿಗೆ, ‘‘ಈ ಮನುಷ್ಯನು ನಜರೇತಿನ ಯೇಸುವಿನೊಂದಿ
ಗಿದ್ದನು’’ ಎಂದು ಹೇಳಿದಳು.

72ಆಗ ಪೇತ್ರನು, ‘‘ನಾನು ದೇವರ ಮೇಲೆ ಆಣೆಯಿಟ್ಟು
ಹೇಳುತ್ತೇನೆ. ನನಗೆ ಯೇಸುವೆಂಬ ಮನುಷ್ಯನು ತಿಳಿದೇ ಇಲ್ಲ!’’
ಎಂದು ನಿರಾಕರಿಸಿದನು. 73ಸ್ವಲ್ಪ ಸಮಯದ ತರುವಾಯ, ಅಲ್ಲಿ
ನಿಂತಿದ್ದ ಕೆಲವು ಜನರು ಪೇತ್ರನ ಸಮೀಪಕ್ಕೆ ಹೋಗಿ,
‘‘ಯೇಸುವನ್ನು ಹಿಂಬಾಲಿಸಿಕೊಂಡು ಬಂದ ಜನರಲ್ಲಿ ನೀನೂ
ಒಬ್ಬನಾಗಿರುವೆ ಎಂಬುದನ್ನು ನೀನು ಮಾತಾಡುವ ರೀತಿಯೇ
ತೋರಿಸುತ್ತದೆ’’ ಎಂದು ಹೇಳಿದರು.

74ಆಗ ಪೇತ್ರನು ಶಪಿಸಿಕೊಳ್ಳತೊಡಗಿ, ‘‘ನಾನು ದೇವರ
ಮೇಲೆ ಆಣೆಯಿಟ್ಟು ಹೇಳುತ್ತೇನೆ. ಯೇಸುವೆಂಬ ಮನುಷ್ಯನು
ನನಗೆ ತಿಳಿದೇ ಇಲ್ಲ!’’ ಎಂದು ಹೇಳಿದನು. ಆ ಕೂಡಲೇ ಕೋಳಿ
ಕೂಗಿತು.

75‘‘ಆತನು ಯಾರೋ ನನಗೆ ಗೊತ್ತೇ ಇಲ್ಲ ಎಂಬುದಾಗಿ
ಕೋಳಿ ಕೂಗುವುದಕ್ಕಿಂತ ಮುಂಚೆ ನೀನು ಮೂರು ಸಲ
ಹೇಳುವೆ’’ ಎಂದು ತನಗೆ ಯೇಸು ಹೇಳಿದ್ದ ಮಾತನ್ನು ಪೇತ್ರನು
ನೆನಪು ಮಾಡಿಕೊಂಡು ಹೊರಗೆ ಹೋಗಿ ಬಹಳವಾಗಿ
ವ್ಯಥೆಪಟ್ಟು ಅತ್ತನು.

## ರಾಜ್ಯಪಾಲನ ಮುಂದೆ ಯೇಸು

(ಮಾರ್ಕ 15:1; ಲೂಕ 23:1-2; ಯೋಹಾನ 18:28-32)

27 ಮರುದಿನ ಮುಂಜಾನೆ, ಮಹಾಯಾಜಕರೆಲ್ಲರೂ
ಮತ್ತು ಹಿರಿಯ ನಾಯಕರೆಲ್ಲರೂ ಯೇಸುವನ್ನು
ಕೊಲ್ಲಲು ತೀರ್ಮಾನಿಸಿದರು. 2ಅವರು ಆತನನ್ನು ಸರ
ಪಣಗಳಿಂದ ಬಂಧಿಸಿ ರಾಜ್ಯಪಾಲನಾದ ಪಿಲಾತನ ಬಳಿಗೆ ಕರೆ
ದೊಯ್ದು ಅವನಿಗೆ ಒಪ್ಪಿಸಿದರು.

## ಯೂದನ ಆತ್ಮಹತ್ಯೆ

(ಅಪೊ. ಕೃತ್ಯ. 1:18-19)

3ಯೇಸುವನ್ನು ಆತನ ವೈರಿಗಳಿಗೆ ಒಪ್ಪಿಸಿಕೊಟ್ಟ ಯೂದನು,
ಯೇಸುವಿಗೆ ಸಂಭವಿಸಿದ್ದನ್ನು ಕಂಡು, ತಾನು ಮಾಡಿದ ದ್ರೋಹ
ಕ್ಕಾಗಿ ಬಹಳ ಪಶ್ಚಾತ್ತಾಪಪಟ್ಟನು. ಅವನು ಬೆಳ್ಳಿಯ ನಾಣ್ಯ
ಗಳನ್ನು ಮಹಾಯಾಜಕರ ಮತ್ತು ಹಿರಿಯನಾಯಕರ ಬಳಿಗೆ
ತೆಗೆದುಕೊಂಡು ಹೋಗಿ, 4‘ನಾನು ಪಾಪ ಮಾಡಿದೆ, ನಿರಪರಾಧಿ
ಯನ್ನು ಕೊಲ್ಲಲು ನಿಮಗೆ ಒಪ್ಪಿಸಿಬಿಟ್ಟೆ’’ಎಂದು ಹೇಳಿದನು.

ಯೆಹೂದ್ಯ ನಾಯಕರು, ‘‘ಅದಕ್ಕೆ ನಾವೇನು ಮಾಡೋಣ!
ಅದು ನಿನ್ನ ಸಮಸ್ಯೆ, ನಮ್ಮದಲ್ಲ!’’ ಎಂದು ಉತ್ತರಕೊಟ್ಟರು.

5ಆಗ ಯೂದನು ಆ ಹಣವನ್ನು ದೇವಾಲಯದೊಳಗೆ
ಬಿಸಾಡಿ ಹೊರಟುಹೋಗಿ ತಾನೇ ನೇಣು ಹಾಕಿಕೊಂಡನು.

6ಮಹಾಯಾಜಕರು ದೇವಾಲಯದಲ್ಲಿದ್ದ ಬೆಳ್ಳಿಯ ನಾಣ್ಯ
ಗಳನ್ನು ಆಯ್ದುಕೊಂಡು, ‘‘ಈ ಹಣವನ್ನು ಒಬ್ಬ ಮನುಷ್ಯನ
ಹತ್ಯೆಗಾಗಿ ಕೊಟ್ಟಿದ್ದ ಕಾರಣ ಇದನ್ನು ದೇವಾಲಯದ ಹಣ
ದೊಂದಿಗೆ ಸೇರಿಸುವುದು ನಮ್ಮ ಧರ್ಮಶಾಸ್ತ್ರಕ್ಕೆ ವಿರುದ್ಧ’’
ಎಂದು ಹೇಳಿದರು. 7ಆದ್ದರಿಂದ ಅವರು ಆ ಹಣದಿಂದ
‘‘ಕುಂಬಾರನ ಹೊಲ’’ ಎಂಬ ಜಮೀನನ್ನು ಕೊಂಡುಕೊಳ್ಳಲು
ತೀರ್ಮಾನಿಸಿದರು. ಜೆರುಸಲೇಮಿಗೆ ಪ್ರವಾಸ ಬಂದವರು
ಸತ್ತರೆ, ಅವರನ್ನು ಈ ಹೊಲದಲ್ಲಿ ಸಮಾಧಿ ಮಾಡಬೇಕೆಂದು
ನಿರ್ಧರಿಸಲಾಯಿತು. 8ಆದಕಾರಣವೇ ಆ ಹೊಲವನ್ನು
ಇಂದಿಗೂ ‘‘ಜೀವ ಹತ್ಯೆಯ ಹೊಲ’’ವೆಂದು ಕರೆಯುತ್ತಾರೆ.
9ಹೀಗೆ ಪ್ರವಾದಿಯಾದ ಯೆರೆಮೀಯನು ಹೇಳಿದ ಮಾತು
ನೆರವೇರಿತು. ಅದೇನೆಂದರೆ:

‘‘ಅವರು ಮೂವತ್ತು ಬೆಳ್ಳಿಯ ನಾಣ್ಯಗಳನ್ನು
ತೆಗೆದುಕೊಂಡರು. ಯೆಹೂದ್ಯರು ಆತನ ಜೀವಕ್ಕೆ
ನಿರ್ಧರಿಸಿದ ಬೆಲೆಯೇ ಅಷ್ಟು. 10ಪ್ರಭುವು ನನಗೆ
ಆಜ್ಞಾಪಿಸಿದಂತೆ, ಅವರು ಮೂವತ್ತು ಬೆಳ್ಳಿಯ

ನಾಣ್ಯಗಳಿಂದ ‘ಕುಂಬಾರನ ಹೊಲ’ವನ್ನು
ಕೊಂಡುಕೊಂಡರು.’’ *

### ರಾಜ್ಯಪಾಲ ಪಿಲಾತನಿಂದ ಯೇಸುವಿಗಾದ ವಿಚಾರಣೆ

(ಮಾರ್ಕ 15:2-5; ಲೂಕ 23:3-5; ಯೋಹಾನ 18:33-38)

11ಯೇಸುವನ್ನು ರಾಜ್ಯಪಾಲ ಪಿಲಾತನ ಎದುರಿನಲ್ಲಿ
ನಿಲ್ಲಿಸಿದರು. ಪಿಲಾತನು ಆತನಿಗೆ, ‘‘ನೀನು ಯೆಹೂದ್ಯರ
ರಾಜನೇ?’’ ಎಂದು ಕೇಳಿದನು. ಯೇಸು,
‘‘ಹೌದು, ನೀನು ಹೇಳಿದಂತೆ ಆತನೇ ನಾನು’’ ಎಂದು
ಉತ್ತರಕೊಟ್ಟನು.
12ಮಹಾಯಾಜಕರು ಮತ್ತು ಯೆಹೂದ್ಯರ ಹಿರಿಯ
ನಾಯಕರು ಯೇಸುವಿನ ಮೇಲೆ ದೂರು ಹೇಳಿದಾಗ, ಆತನು
ಮೌನವಾಗಿದ್ದನು. 13ಆದ್ದರಿಂದ ಪಿಲಾತನು ಯೇಸುವನ್ನು,
‘‘ಈ ಜನರು ನಿನ್ನ ಮೇಲೆ ಹೇಳುತ್ತಿರುವ ಈ ದೂರುಗಳನ್ನೆಲ್ಲ
ನೀನು ಕೇಳುತ್ತಿದ್ದರೂ ಏಕೆ ಉತ್ತರ ಕೊಡುತ್ತಿಲ್ಲ?’’ ಎಂದು
ಕೇಳಿದನು.
14ಆದರೆ ಯೇಸು ಪಿಲಾತನಿಗೆ ಉತ್ತರ ಕೊಡಲೇ ಇಲ್ಲ.
ಪಿಲಾತನಿಗೆ ಬಹಳ ಆಶ್ಚರ್ಯವಾಯಿತು.

### ಯೇಸುವನ್ನು ಬಿಡಿಸಲು ಪಿಲಾತನ ವಿಫಲ ಯತ್ನ

(ಮಾರ್ಕ 15:6-15; ಲೂಕ 23:13-25;
ಯೋಹಾನ 18:39-19:16)

15ಪ್ರತಿವರ್ಷವೂ ಪಸ್ಕಹಬ್ಬದ ಸಮಯದಲ್ಲಿ ಜನರು
ಬಯಸುವ ಕೈದಿಗಳಲ್ಲಿ ಒಬ್ಬನನ್ನು ರಾಜ್ಯಪಾಲನು ಬಿಡುಗಡೆ
ಮಾಡಬೇಕೆಂಬುದು ಅಂದಿನ ಪದ್ಧತಿಯಾಗಿತ್ತು. 16ಆ ಕಾಲದಲ್ಲಿ
ಪ್ರಸಿದ್ಧನಾದ ಕೈದಿಯೊಬ್ಬನು ಸೆರೆಮನೆಯಲ್ಲಿದ್ದನು. ಅವನ
ಹೆಸರು ಬರಬ್ಬ.* 17ಜನರೆಲ್ಲರೂ ಪಿಲಾತನ ಭವನದ ಬಳಿ
ನೆರೆದಿದ್ದರು. ಪಿಲಾತನು ಅವರಿಗೆ, ‘ನಾನು ನಿಮಗಾಗಿ ಯಾವ
ಕೈದಿಯನ್ನು ಬಿಡುಗಡೆ ಮಾಡಲಿ, ಬರಬ್ಬನನ್ನೇ ಅಥವಾ ಕ್ರಿಸ್ತ
ನೆಂದು ಕರೆಸಿಕೊಳ್ಳುವ ಯೇಸುವನ್ನೇ?’ ಎಂದು ಕೇಳಿದನು.
18ಜನರು ಹೊಟ್ಟೆಕಿಚ್ಚಿನಿಂದ ಯೇಸುವನ್ನು ತನಗೆ ಒಪ್ಪಿಸಿ
ದ್ದಾರೆಂಬುದು ಪಿಲಾತನಿಗೆ ಗೊತ್ತಿತ್ತು.
19ಪಿಲಾತನು ನ್ಯಾಯಸ್ಥಾನದಲ್ಲಿ ಕುಳಿತುಕೊಂಡಿದ್ದಾಗ ಅವನ
ಪತ್ನಿಯು ಒಂದು ಸಂದೇಶವನ್ನು ಕಳುಹಿಸಿದ್ದಳು. ‘‘ಆ
ಮನುಷ್ಯನಿಗೆ ಏನನ್ನೂ ಮಾಡಬೇಡ. ಅವನು ತಪ್ಪಿತಸ್ಥನಲ್ಲ.
ಆತನ ನಿಮಿತ್ತ ಕಳೆದ ರಾತ್ರಿ ಕನಸಿನಲ್ಲಿ ಬಹಳ ಸಂಕಟ
ಪಟ್ಟಿದ್ದೇನೆ’’ಎಂಬುದೇ ಆ ಸಂದೇಶ.
20ಆದರೆ ಮಹಾಯಾಜಕರು ಮತ್ತು ಹಿರಿಯ ಯೆಹೂದ್ಯ
ನಾಯಕರು, ಬರಬ್ಬನನ್ನು ಬಿಡುಗಡೆ ಮಾಡಬೇಕೆಂದೂ
ಯೇಸುವನ್ನು ಕೊಲ್ಲಿಸಬೇಕೆಂದೂ ಕೇಳಿಕೊಳ್ಳಲು ಜನರಿಗೆ
ಹೇಳಿಕೊಟ್ಟರು.
21ಪಿಲಾತನು, ‘‘ನಿಮಗಾಗಿ ನಾನು ಯಾರನ್ನು ಬಿಡುಗಡೆ
ಮಾಡಲಿ? ಬರಬ್ಬನನ್ನೇ? ಯೇಸುವನ್ನೇ? ಎಂದು ಕೇಳಿದನು.
ಜನರು ‘‘ಬರಬ್ಬನನ್ನು!’’ ಎಂದು ಉತ್ತರಕೊಟ್ಟರು.
22ಪಿಲಾತನು, ‘‘ಹಾಗಾದರೆ ಕ್ರಿಸ್ತನೆಂದು ಕರೆಸಿಕೊಳ್ಳುವ
ಯೇಸುವನ್ನು ನಾನೇನು ಮಾಡಲಿ?’’ ಎಂದು ಕೇಳಿದನು.
ಜನರೆಲ್ಲರೂ, ‘‘ಅವನನ್ನು ಶಿಲುಬೆಗೇರಿಸು!’’ ಎಂದು ಉತ್ತರ
ಕೊಟ್ಟರು.
23ಪಿಲಾತನು, ‘‘ಅವನನ್ನು ಶಿಲುಬೆಗೇರಿಸೆಂದು ನೀವು
ಕೇಳುವುದೇಕೆ? ಅವನೇನು ತಪ್ಪುಮಾಡಿದ್ದಾನೆ?’’ ಎಂದು
ಕೇಳಿದನು.
ಆದರೆ ಜನರೆಲ್ಲರೂ, ‘‘ಅವನನ್ನು ಶಿಲುಬೆಗೇರಿಸು!’’ ಎಂದು
ಜೋರಾಗಿ ಕೂಗಿದರು.
24ಜನರ ಮನಸ್ಸನ್ನು ಬದಲಾಯಿಸಲು ತನಗೆ ಸಾಧ್ಯವಿಲ್ಲ
ಎಂತಲೂ ಜನರು ಗಲಭೆ ಆರಂಭಿಸಲಿದ್ದಾರೆ ಎಂಬುದನ್ನೂ
ತಿಳಿದುಕೊಂಡ ಪಿಲಾತನು ಸ್ವಲ್ಪ ನೀರನ್ನು ತೆಗೆದುಕೊಂಡು
ಜನರೆಲ್ಲರ ಎದುರಿನಲ್ಲಿ ತನ್ನ ಕೈಗಳನ್ನು ತೊಳೆದುಕೊಳ್ಳುತ್ತಾ ‘‘ಈ
ಮನುಷ್ಯನ ಸಾವಿಗೆ ನಾನು ಜವಾಬ್ದಾರನಲ್ಲ. ಆತನನ್ನು
ಶಿಲುಬೆಗೇರಿಸುತ್ತಿರುವವರು ನೀವೇ!’’ ಎಂದು ಹೇಳಿದನು.
25ಜನರೆಲ್ಲರೂ, ‘‘ಅವನ ಸಾವಿಗೆ ನಾವೇ ಜವಾಬ್ದಾರರು.
ಅವನ ಸಾವಿಗೆ ಏನಾದರೂ ದಂಡನೆಯಿದ್ದರೆ ಅದನ್ನು ನಾವು
ಮತ್ತು ನಮ್ಮ ಮಕ್ಕಳು ಅನುಭವಿಸುತ್ತೇವೆ’’ ಎಂದು ಉತ್ತರ
ಕೊಟ್ಟರು.
26ಆಗ ಪಿಲಾತನು ಬರಬ್ಬನನ್ನು ಬಿಡುಗಡೆ ಮಾಡಿ,
ಯೇಸುವನ್ನು ಕೊರಡೆಗಳಿಂದ ಹೊಡೆಯಿಸಿ ಶಿಲುಬೆಗೇರಿಸಲು
ಸೈನಿಕರಿಗೆ ಒಪ್ಪಿಸಿಬಿಟ್ಟನು.

### ಪಿಲಾತನ ಸೈನಿಕರು ಯೇಸುವಿಗೆ ಮಾಡಿದ ಅಪಹಾಸ್ಯ

(ಮಾರ್ಕ 15:16-20; ಯೋಹಾನ 19:2-3)

27ಪಿಲಾತನ ಸೈನಿಕರು ಯೇಸುವನ್ನು ರಾಜಭವನದ ಒಳಕ್ಕೆ
ಕರೆದೊಯ್ದರು. ಸೈನಿಕರೆಲ್ಲರೂ ಯೇಸುವನ್ನು ಸುತ್ತು
ಗಟ್ಟಿದರು. 28ಸೈನಿಕರು ಆತನ ಬಟ್ಟೆಗಳನ್ನು ತೆಗೆದುಹಾಕಿ ಆತನಿಗೆ
ಒಂದು ಕೆಂಪು ನಿಲುವಂಗಿಯನ್ನು ತೊಡಿಸಿದರು. 29ಮುಳ್ಳಿನ
ಬಳ್ಳಿಯಿಂದ ಒಂದು ಕಿರೀಟವನ್ನು ಹೆಣೆದು ಆತನ ತಲೆಯ
ಮೇಲಿಟ್ಟರು. ಆತನ ಬಲಗೈಗೆ ಒಂದು ಕೋಲನ್ನು ಕೊಟ್ಟರು.
ಬಳಿಕ ಸೈನಿಕರು ಯೇಸುವಿನ ಮುಂದೆ ಬಾಗಿ, ‘‘ಯೆಹೂದ್ಯರ
ರಾಜನೇ, ನಮಸ್ಕಾರ’’ ಎಂದು ಅಪಹಾಸ್ಯ ಮಾಡಿದರು. 30ಆತನ
ಮೇಲೆ ಉಗುಳಿದರು. ಆತನ ಕೈಯಿಂದ ಕೋಲನ್ನು ತೆಗೆದು
ಕೊಂಡು ತಲೆಯ ಮೇಲೆ ಹೊಡೆದರು. 31ಹೀಗೆ ಅಪಹಾಸ್ಯ
ಮಾಡಿದ ಬಳಿಕ, ಆತನ ನಿಲುವಂಗಿಯನ್ನು ತೆಗೆದುಹಾಕಿ ಆತನ
ಬಟ್ಟೆಗಳನ್ನು ಮತ್ತೆ ಆತನಿಗೆ ತೊಡಿಸಿ ಶಿಲುಬೆಗೇರಿಸಲು
ಕರೆದೊಯ್ದರು.

### ಶಿಲುಬೆಗೇರಿಸಲ್ಪಟ್ಟ ಯೇಸು

(ಮಾರ್ಕ 15:21-32; ಲೂಕ 23:26-43; ಯೋಹಾನ 19:17-27)

32ಸೈನಿಕರು ಯೇಸುವಿನೊಂದಿಗೆ ನಗರದಿಂದ ಹೊರಕ್ಕೆ
ಹೋಗುತ್ತಿರುವಾಗ ಸಿರೇನ ಪಟ್ಟಣದ ‘‘ಸಿಮೋನ’’ ಎಂಬ
ವ್ಯಕ್ತಿಯನ್ನು ಕಂಡರು. ಆತನ ಶಿಲುಬೆ ಹೊರುವುದಕ್ಕಾಗಿ ಅವರು
ಅವನನ್ನು ಬಲವಂತ ಪಡಿಸಿದರು. 33ಅವರು ಗೊಲ್ಗೊಥಾ ಎಂಬ
ಸ್ಥಳಕ್ಕೆ ಬಂದರು. (ಗೊಲ್ಗೊಥಾ ಎಂದರೆ ‘‘ಕಪಾಲ ಸ್ಥಳ’’
ಎಂದರ್ಥ.) 34ಗೊಲ್ಗೊಥಾದಲ್ಲಿ ಸೈನಿಕರು ಆತನಿಗೆ

---

**ಅವರು … ಕೊಂಡುಕೊಂಡರು** ಜೆಕರ್ಯ 11:12–13; ಯೆರೆಮೀಯ 32:6–9.

**ಬರಬ್ಬ** ಕೆಲವು ಗ್ರೀಕ್ ಪ್ರತಿಗಳಲ್ಲಿ ‘‘ಏಸು ಬರಬ್ಬ’’ ಎಂದಿದೆ.

ಕುಡಿಯಲು ದ್ರಾಕ್ಷಾರಸವನ್ನು ಕೊಟ್ಟರು. ಈ ದ್ರಾಕ್ಷಾರಸಕ್ಕೆ
ನೋವು ನಿವಾರಕ ಔಷಧಿಯನ್ನು* ಬೆರೆಸಿದ್ದರು. ಆತನು
ದ್ರಾಕ್ಷಾರಸದ ರುಚಿ ನೋಡಿ ಅದನ್ನು ಕುಡಿಯಲಿಲ್ಲ.
35ಸೈನಿಕರು ಆತನನ್ನು ಶಿಲುಬೆಗೆ ಮೊಳೆಗಳಿಂದ ಜಡಿದರು.
ನಂತರ ಆತನ ಉಡುಪಿಗಾಗಿ ತಮ್ಮಲ್ಲಿಯೇ ಚೀಟಿಹಾಕಿ
ತೆಗೆದುಕೊಂಡರು. 36ಸೈನಿಕರು ಯೇಸುವನ್ನು ಕಾಯುತ್ತಾ
ಅಲ್ಲೇ ಕುಳಿತಿದ್ದರು. 37ಇದಲ್ಲದೆ ಆತನ ಮೇಲೆ ಹೊರಿಸಿದ
ಅಪರಾಧವನ್ನು ಬರೆದು ಆತನ ತಲೆಯ ಮೇಲ್ಗಡೆ ಹಚ್ಚಿದರು.
''ಈತನು ಯೇಸು, ಯೆಹೂದ್ಯರ ರಾಜ'' ಎಂಬುದೇ ಆ
ಅಪರಾಧ. 38ಯೇಸುವಿನ ಪಕ್ಕದಲ್ಲಿ ಇಬ್ಬರು ಕಳ್ಳರನ್ನು
ಶಿಲುಬೆಗೆ ಹಾಕಿದ್ದರು. ಒಬ್ಬ ಕಳ್ಳನನ್ನು ಯೇಸುವಿನ ಬಲಗಡೆ
ಯಲ್ಲಿಯೂ ಮತ್ತೊಬ್ಬ ಕಳ್ಳನನ್ನು ಯೇಸುವಿನ ಎಡಗಡೆಯ
ಲ್ಲಿಯೂ ಹಾಕಿದ್ದರು. 39ದಾರಿಯಲ್ಲಿ ಹೋಗುತ್ತಿದ್ದ ಜನರು ತಲೆ
ಯಾಡಿಸುತ್ತಾ, 40''ನೀನು ದೇವಾಲಯವನ್ನು ಕೆಡವಿ, ಅದನ್ನು
ಮತ್ತೆ ಮೂರು ದಿನಗಳಲ್ಲಿ ನಿರ್ಮಿಸುತ್ತೇನೆಂದು ಹೇಳುತ್ತಿದ್ದೆ.
ಆದರೆ ಈಗ ನಿನ್ನನ್ನು ನೀನು ರಕ್ಷಿಸಿಕೊ! ನೀನು ನಿಜವಾಗಿಯೂ
ದೇವರ ಮಗನಾಗಿದ್ದರೆ, ಶಿಲುಬೆಯಿಂದ ಕೆಳಗಿಳಿದು ಬಾ!''
ಎಂದು ಹಾಸ್ಯಮಾಡಿದರು.

41ಮಹಾಯಾಜಕರೂ ಧರ್ಮೋಪದೇಶಕರೂ ಮತ್ತು
ಹಿರಿಯ ಯೆಹೂದ್ಯನಾಯಕರೂ ಅಲ್ಲಿದ್ದರು. ಇವರು ಸಹ
ಇತರ ಜನರಂತೆ ಯೇಸುವನ್ನು ಗೇಲಿ ಮಾಡಿದರು. 42''ಇವನು
ಬೇರೆಯವರನ್ನು ರಕ್ಷಿಸಿದನು. ಆದರೆ ತನ್ನನ್ನು ರಕ್ಷಿಸಿಕೊಳ್ಳ
ಲಾರ! ಇಸ್ರೇಲರ ರಾಜ ಎಂದು ಜನ ಹೇಳುತ್ತಾರೆ. ಇವನು
ರಾಜನಾಗಿದ್ದರೆ ಶಿಲುಬೆಯಿಂದ ಕೆಳಗಿಳಿದು ಬರಲಿ. ಆಗ ನಾವು
ಇವನನ್ನು ನಂಬುತ್ತೇವೆ. 43ಇವನು ದೇವರನ್ನು ನಂಬಿದ್ದನು.
ಈಗ ದೇವರಿಗೆ ನಿಜವಾಗಿಯೂ ಇವನು ಬೇಕಿದ್ದರೆ, ದೇವರೇ
ಇವನನ್ನು ಕಾಪಾಡಲಿ. 'ನಾನು ದೇವರ ಮಗನು' ಎಂದು ಇವನೇ
ಹೇಳಿಕೊಂಡನಲ್ಲಾ'' ಎಂದು ಅವರು ಹೇಳಿದರು. 44ಅದೇ ರೀತಿ
ಯಲ್ಲಿ ಯೇಸುವಿನ ಎಡಬಲಗಳಲ್ಲಿ ಶಿಲುಬೆಗೆ ಹಾಕಲ್ಪಟ್ಟಿದ್ದ
ಕಳ್ಳರು ಸಹ ಆತನನ್ನು ನಿಂದಿಸಿದರು.

### ಯೇಸುವಿನ ಮರಣ

(ಮಾರ್ಕ 15:33-41; ಲೂಕ 23:44-49; ಯೋಹಾನ 19:28-30)

45ಅಂದು ಮಧ್ಯಾಹ್ನ ಹನ್ನೆರಡು ಗಂಟೆಯಿಂದ ಮೂರು
ಗಂಟೆಯವರೆಗೆ ದೇಶದಲ್ಲೆಲ್ಲಾ ಕತ್ತಲೆ ಕವಿಯಿತು. 46ಸುಮಾರು
ಮೂರು ಗಂಟೆಯ ಸಮಯದಲ್ಲಿ ಯೇಸು, ''ಏಲೀ, ಏಲೀ,
ಲಮಾ ಸಬಕ್ತಾನಿ?'' ಎಂದು ಗಟ್ಟಿಯಾದ ಧ್ವನಿಯಲ್ಲಿ
ಕೂಗಿದನು. ಹೀಗೆಂದರೆ, ''ನನ್ನ ದೇವರೇ, ನನ್ನ ದೇವರೇ,
ಯಾಕೆ ನನ್ನನ್ನು ಕೈ ಬಿಟ್ಟುಬಿಟ್ಟೆ?* ಎಂದರ್ಥ.

47ಅಲ್ಲಿ ನಿಂತಿದ್ದ ಕೆಲವು ಜನರು ಇದನ್ನು ಕೇಳಿ, ''ಇವನು
ಎಲೀಯನನ್ನು ಕರೆಯುತ್ತಿದ್ದಾನೆ'' ಎಂದು ಹೇಳಿದರು.

48ಆ ಜನರಲ್ಲಿ ಒಬ್ಬನು ಓಡಿಹೋಗಿ ಸ್ಪಂಜನ್ನು ತಂದು,
ಅದರಲ್ಲಿ ಹುಳಿರಸವನ್ನು ತುಂಬಿಸಿ, ಅದನ್ನು ಒಂದು ಕೋಲಿಗೆ
ಕಟ್ಟಿ, ಆ ಕೋಲಿನಿಂದ ಸ್ಪಂಜನ್ನು ಯೇಸುವಿಗೆ ಕುಡಿಯಲು
ಕೊಟ್ಟನು. 49ಆದರೆ ಇತರ ಜನರು, ''ಅವನ ಬಗ್ಗೆ ಚಿಂತಿಸಬೇಡ,
ಅವನನ್ನು ರಕ್ಷಿಸಲು ಎಲೀಯನು ಬರಬಹುದೇನೊ
ನೋಡೋಣ'' ಎಂದು ಹೇಳಿದರು.

50ಬಳಿಕ ಯೇಸು ಮತ್ತೆ ಗಟ್ಟಿಯಾದ ಧ್ವನಿಯಲ್ಲಿ ಕೂಗಿ
ಪ್ರಾಣಬಿಟ್ಟನು. 51ಆಗ ದೇವಾಲಯದ ತೆರೆಯು ಮೇಲ್ಗಡೆ
ಯಿಂದ ತಳಭಾಗದವರೆಗೂ ಹರಿದು ಎರಡು ಭಾಗವಾಯಿತು.
ಭೂಮಿಯು ನಡುಗಿತು. ಬಂಡೆಗಳು ಒಡೆದುಹೋದವು.
52ಸಮಾಧಿಗಳು ತೆರೆದವು, ಸತ್ತುಹೋಗಿದ್ದ ಅನೇಕ ದೇವಜನರು
ಸಮಾಧಿಗಳೊಳಗಿಂದ ಜೀವಂತವಾಗಿ ಮೇಲೆದ್ದರು. 53ಯೇಸು
ಪುನರುತ್ಥಾನ ಹೊಂದಿದ ಬಳಿಕ, ಅವರು ಪವಿತ್ರ ನಗರವಾದ
ಜೆರುಸಲೇಮಿಗೆ ಹೋದರು. ಜನರು ಅವರನ್ನು ಕಣ್ಣಾರೆ
ಕಂಡರು.

54ಯೇಸುವನ್ನು ಕಾಯುತ್ತಿದ್ದ ಸೇನಾಧಿಪತಿ ಮತ್ತು ಸೈನಿಕರು
ಭೂಕಂಪವನ್ನು ಮತ್ತು ನಡೆದದ್ದನ್ನು ಕಂಡು ಬಹಳವಾಗಿ ಹೆದರಿ,
''ಅವನು ನಿಜವಾಗಿಯೂ ದೇವರ ಮಗನಾಗಿದ್ದನು!'' ಎಂದು
ಹೇಳಿದರು.

55ಯೇಸುವಿನ ಸೇವೆ ಮಾಡುತ್ತಾ ಗಲಿಲಾಯದಿಂದ ಆತನನ್ನು
ಹಿಂಬಾಲಿಸಿಕೊಂಡು ಬಂದಿದ್ದ ಅನೇಕ ಸ್ತ್ರೀಯರು ದೂರದಲ್ಲಿ
ನೋಡುತ್ತಾ ನಿಂತಿದ್ದರು. 56ಮಗ್ದಲದ ಮರಿಯಳು,
ಯಾಕೋಬ ಮತ್ತು ಯೋಸೇಫನ ತಾಯಿಯಾದ ಮರಿಯಳು,
ಹಾಗೂ ಯೋಹಾನ ಮತ್ತು ಯಾಕೋಬನ ತಾಯಿ ಅಲ್ಲಿದ್ದರು.

### ಯೇಸುವಿನ ಸಮಾಧಿ

(ಮಾರ್ಕ 15:42-47; ಲೂಕ 23:50-56; ಯೋಹಾನ 19:38-42)

57ಆ ಸಂಜೆ ಯೋಸೇಫ ಎಂಬ ಶ್ರೀಮಂತ ವ್ಯಕ್ತಿ
ಜೆರುಸಲೇಮಿಗೆ ಬಂದನು. ಅರಿಮತಾಯ ಪಟ್ಟಣದವನಾದ
ಇವನು ಯೇಸುವಿನ ಶಿಷ್ಯನಾಗಿದ್ದನು. 58ಇವನು ಪಿಲಾತನ
ಬಳಿಗೆ ಹೋಗಿ, ಯೇಸುವಿನ ದೇಹವನ್ನು ತನಗೆ ಕೊಡ
ಬೇಕೆಂದು ಕೇಳಿದನು. ಯೇಸುವಿನ ದೇಹವನ್ನು ಯೋಸೇಫನಿಗೆ
ಕೊಡುವಂತೆ ಪಿಲಾತನು ಸೈನಿಕರಿಗೆ ಅಪ್ಪಣೆ ಮಾಡಿದನು.
59ಯೋಸೇಫನು ಆತನ ದೇಹವನ್ನು ತೆಗೆದುಕೊಂಡು, ಅದನ್ನು
ಹೊಸ ನಾರುಮಡಿಯ ಬಟ್ಟೆಯಿಂದ ಸುತ್ತಿ 60ಬಂಡೆಯಲ್ಲಿ
ತಾನು ತೋಡಿಸಿದ್ದ ಹೊಸ ಸಮಾಧಿಯಲ್ಲಿ ಇಟ್ಟನು. ಸಮಾಧಿಯ
ಬಾಗಿಲಿಗೆ ಒಂದು ದೊಡ್ಡ ಬಂಡೆಯನ್ನು ಉರುಳಿಸಿ ಹೊರಟು
ಹೋದನು. 61ಮಗ್ದಲದ ಮರಿಯಳು ಮತ್ತು ಇನ್ನೊಬ್ಬ
ಮರಿಯಳು ಆ ಸಮಾಧಿಯ ಹತ್ತಿರ ಕುಳಿತುಕೊಂಡಿದ್ದರು.

### ಯೇಸುವಿನ ಸಮಾಧಿಗೆ ಕಾವಲು

62ಶುಕ್ರವಾರ* ಮುಗಿದ ಮೇಲೆ ಮಹಾಯಾಜಕರು ಮತ್ತು
ಫರಿಸಾಯರು ಪಿಲಾತನ ಬಳಿಗೆ ಹೋಗಿ, 63''ಸ್ವಾಮೀ, ಆ
ಸುಳ್ಳುಗಾರನು ಬದುಕಿದ್ದಾಗ, 'ಮೂರು ದಿನಗಳ ಬಳಿಕ ನಾನು
ಪುನರುತ್ಥಾನ ಹೊಂದುತ್ತೇನೆ'' ಎಂದು ಹೇಳಿದ್ದು ನಮಗಿನ್ನೂ
ನೆನಪಿದೆ. 64ಆದ್ದರಿಂದ ಮೂರು ದಿನಗಳವರೆಗೆ ಆ ಸಮಾಧಿ
ಯನ್ನು ಭದ್ರವಾಗಿ ಕಾಯಲು ಆಜ್ಞಾಪಿಸಿರಿ. ಅವನ ಶಿಷ್ಯರು
ಬಂದು, ಅವನ ದೇಹವನ್ನು ಕದ್ದುಕೊಂಡು ಹೋಗಿ, ಅವನು
ಸಮಾಧಿಯಿಂದ ಮೇಲೆದ್ದಿದ್ದಾನೆ ಎಂದು ಜನರಿಗೆ ಹೇಳ

**ಔಷಧಿಯನ್ನು** ಅಕ್ಷರಶಃ ಕಡುಕಹಿಯಾದ ರಸ.

**''ನನ್ನ ದೇವರೇ ... ಕೈ ಬಿಟ್ಟುಬಿಟ್ಟೆ? ''** ಕೀರ್ತನೆ 22:1

**ಶುಕ್ರವಾರ** ಸಿದ್ಧತೆಯ ದಿನ.

ಬಹುದು. ಆಗ ಮೊದಲನೆಯ ಮೋಸಕ್ಕಿಂತ ಕಡೆಯದೇ ಕಡು
ಮೋಸವಾದೀತು'' ಎಂದು ಹೇಳಿದರು.
65ಪಿಲಾತನು, ''ಕೆಲವು ಸೈನಿಕರನ್ನು ಕರೆದುಕೊಂಡು ಹೋಗಿ,
ನಿಮಗೆ ಬೇಕಾದ ರೀತಿಯಲ್ಲಿ ಸಮಾಧಿಯನ್ನು ಭದ್ರಪಡಿಸಿರಿ''
ಎಂದು ಹೇಳಿದನು. 66ಅವರು ಹೋಗಿ, ಸಮಾಧಿಗೆ ಮುದ್ರೆ
ಹಾಕಿ, ಸೈನಿಕರನ್ನು ಕಾವಲಿರಿಸಿ, ಸಮಾಧಿಯನ್ನು ಸುಭದ್ರ
ಪಡಿಸಿದರು.

### ಯೇಸುವಿನ ಪುನರುತ್ಥಾನ

(ಮಾರ್ಕ 16:1-8; ಲೂಕ 24:1-12; ಯೋಹಾನ 20:1-10)

28 ಸಬ್ಬತ್‌ದಿನ ಕಳೆದಿತ್ತು. ಭಾನುವಾರ ಬೆಳಗಾಗು
ವುದರಲ್ಲಿತ್ತು. ಮಗ್ದಲದ ಮರಿಯಳು ಮತ್ತು
ಇನ್ನೊಬ್ಬ ಮರಿಯಳು ಸಮಾಧಿಯನ್ನು ನೋಡಲು ಹೋದರು.
2ಆಗ ಭೀಕರ ಭೂಕಂಪವಾಯಿತು. ಪ್ರಭುವಿನ
ದೂತನೊಬ್ಬನು ಆಕಾಶದಿಂದ ಇಳಿದುಬಂದನು. ಆ ದೇವ
ದೂತನು ಸಮಾಧಿಯ ಬಳಿಗೆ ಹೋಗಿ, ಸಮಾಧಿಯ ಬಾಗಿಲಿ
ನಿಂದ ಬಂಡೆಯನ್ನು ಉರುಳಿಸಿ ಆ ಬಂಡೆಯ ಮೇಲೆ ಕುಳಿತು
ಕೊಂಡನು. 3ದೇವದೂತನು ಮಿಂಚಿನಂತೆ ಪ್ರಕಾಶಿಸುತ್ತಿದ್ದನು.
ಅವನ ಬಟ್ಟೆಗಳು ಮಂಜಿನಂತೆ ಬಿಳುಪಾಗಿದ್ದುವು. 4ಸಮಾಧಿ
ಯನ್ನು ಕಾಯುತ್ತಿದ್ದ ಸೈನಿಕರು ದೇವದೂತನನ್ನು ಕಂಡು
ಬಹಳವಾಗಿ ಹೆದರಿ ಭಯದಿಂದ ನಡುಗುತ್ತಾ ಸತ್ತಂತಾದರು.
5ದೇವದೂತನು ಆ ಸ್ತ್ರೀಯರಿಗೆ, ''ಹೆದರಬೇಡಿ,
ಶಿಲುಬೆಗೇರಿಸಲ್ಪಟ್ಟ ಯೇಸುವನ್ನು ನೀವು ಹುಡುಕುತ್ತಿದ್ದೀ
ರೆಂಬುದು ನನಗೆ ತಿಳಿದಿದೆ. 6ಆದರೆ ಯೇಸು ಇಲ್ಲಿಲ್ಲ. ಆತನು
ತಾನು ತಿಳಿಸಿದ್ದಂತೆಯೇ ಪುನರುತ್ಥಾನ ಹೊಂದಿದ್ದಾನೆ. ಬನ್ನಿ,
ಆತನ ದೇಹವಿದ್ದ ಸ್ಥಳವನ್ನು ನೋಡಿ. 7ಬೇಗನೆ ಹೋಗಿ ಆತನ
ಶಿಷ್ಯರಿಗೆ, 'ಯೇಸು ಪುನರುತ್ಥಾನ ಹೊಂದಿದ್ದಾನೆ. ಆತನು
ಗಲಿಲೇಯಕ್ಕೆ ಹೋಗುತ್ತಿದ್ದಾನೆ. ನಿಮಗಿಂತ ಮುಂಚೆಯೇ
ಆತನು ಅಲ್ಲಿರುತ್ತಾನೆ. ನೀವು ಆತನನ್ನು ಅಲ್ಲಿ ನೋಡುತ್ತೀರಿ'
ಎಂದು ಹೇಳಿರಿ. ನಾನು ನಿಮಗೆ ತಿಳಿಸಬೇಕಾದ ಸಮಾಚಾರ
ಇದೇ, ಮರೆಯದಿರಿ'' ಎಂದನು.
8ಕೂಡಲೇ ಆ ಸ್ತ್ರೀಯರು ಭಯದಿಂದಲೂ ಸಂತೋಷ
ದಿಂದಲೂ ಸಮಾಧಿಯಿಂದ ಹೊರಟರು. ನಡೆದ ಸಂಗತಿಯನ್ನು
ಶಿಷ್ಯರಿಗೆ ತಿಳಿಸಲು ಅವರು ಓಡಿಹೋಗುತ್ತಿರಲು, 9ಯೇಸು
ಅವರ ಮುಂದೆ ಪ್ರತ್ಯಕ್ಷನಾಗಿ, ''ನಿಮಗೆ ಶುಭವಾಗಲಿ''
ಎಂದನು. ಆ ಸ್ತ್ರೀಯರು ಯೇಸುವಿನ ಬಳಿಗೆ ಹೋಗಿ, ಆತನ
ಪಾದಗಳನ್ನು ಹಿಡಿದುಕೊಂಡು ಆತನನ್ನು ಆರಾಧಿಸಿದರು.
10ಯೇಸು ಆ ಸ್ತ್ರೀಯರಿಗೆ, ''ಹೆದರಬೇಡಿ, ನನ್ನ ಸಹೋದರರ
ಬಳಿಗೆ ಹೋಗಿ ಗಲಿಲಾಯಕ್ಕೆ ಬರಲು ತಿಳಿಸಿರಿ. ಅವರು ನನ್ನನ್ನು
ಅಲ್ಲಿ ಕಾಣುವರು'' ಎಂದು ಹೇಳಿದನು.

### ಯೆಹೂದ್ಯ ನಾಯಕರಿಗೆ ಬಂದ ವರದಿ

11ಆ ಸ್ತ್ರೀಯರು ಶಿಷ್ಯರಿಗೆ ತಿಳಿಸಲು ಹೋದರು. ಇತ್ತ
ಸಮಾಧಿಯನ್ನು ಕಾಯುತ್ತಿದ್ದ ಕೆಲವು ಸೈನಿಕರು ನಗರದೊಳಕ್ಕೆ
ಹೋಗಿ ನಡೆದ ಸಂಗತಿಯನ್ನೆಲ್ಲಾ ಮಹಾಯಾಜಕರಿಗೆ
ತಿಳಿಸಿದರು. 12ಆಗ ಮಹಾಯಾಜಕರು ಹಿರಿಯ ಯೆಹೂದ್ಯ
ರನ್ನು ಭೇಟಿಮಾಡಿ ಚರ್ಚಿಸಿದರು ಮತ್ತು ಸೈನಿಕರಿಗೆ ಹೆಚ್ಚು
ಹಣಕೊಟ್ಟು ಅವರಿಂದ ಸುಳ್ಳುಹೇಳಿಸುವ ಉಪಾಯವನ್ನು
ಮಾಡಿದರು. 13ಅವರು ಸೈನಿಕರಿಗೆ, ''ರಾತ್ರಿವೇಳೆಯಲ್ಲಿ ನಾವು
ನಿದ್ರಿಸುತ್ತಿದ್ದಾಗ ಯೇಸುವಿನ ಶಿಷ್ಯರು ಬಂದು ಆತನ ದೇಹವನ್ನು
ಕದ್ದೊಯ್ದರೆಂದು ಜನರಿಗೆ ತಿಳಿಸಿರಿ. 14ಇದು ರಾಜ್ಯಪಾಲನಿಗೆ
ಗೊತ್ತಾದರೂ ನಾವು ಅವನನ್ನು ಸಮಾಧಾನಪಡಿಸುತ್ತೇವೆ ಮತ್ತು
ನಿಮಗೇನೂ ತೊಂದರೆಯಾಗದಂತೆ ನೋಡಿಕೊಳ್ಳುತ್ತೇವೆ''
ಎಂದು ಹೇಳಿದರು. 15ಸೈನಿಕರು ಹಣವನ್ನು ತೆಗೆದುಕೊಂಡು,
ಅವರು ಹೇಳಿದಂತೆಯೇ ಮಾಡಿದರು. ಈ ಕಥೆಯು
ಇಂದಿನವರೆಗೂ ಯೆಹೂದ್ಯರಲ್ಲಿ ಹಬ್ಬಿಕೊಂಡಿದೆ.

### ಯೇಸು ತನ್ನ ಶಿಷ್ಯರಿಗೆ ಹೇಳಿದ ಕಡೆಯ ಮಾತುಗಳು

(ಮಾರ್ಕ 16:14-18; ಲೂಕ 24:36-49; ಯೋಹಾನ 20:19-23;
ಅಪೊ. ಕೃತ್ಯ. 1:6-8)

16ಹನ್ನೊಂದು ಮಂದಿ ಶಿಷ್ಯರು ಗಲಿಲಾಯಕ್ಕೆ ಹೊರಟು
ಯೇಸು ತಿಳಿಸಿದ್ದ ಬೆಟ್ಟಕ್ಕೆ ಬಂದರು. 17ಶಿಷ್ಯರು ಬೆಟ್ಟದ ಮೇಲೆ
ಯೇಸುವನ್ನು ಕಂಡು ಆತನನ್ನು ಆರಾಧಿಸಿದರು. ಆದರೆ ಕೆಲವು
ಶಿಷ್ಯರು ಆತನೇ ನಿಜವಾದ ಯೇಸು ಎಂಬುದನ್ನು ನಂಬಲಿಲ್ಲ.
18ಆದ್ದರಿಂದ ಯೇಸು ಅವರ ಬಳಿಗೆ ಬಂದು, ''ಪರಲೋಕದ
ಮತ್ತು ಈ ಲೋಕದ ಅಧಿಕಾರವೆಲ್ಲವನ್ನು ನನಗೆ ಕೊಡಲಾಗಿದೆ.
19ಆದ್ದರಿಂದ ನೀವು ಹೋಗಿ, ಲೋಕದಲ್ಲಿರುವ ಜನರೆಲ್ಲರನ್ನು
ನನ್ನ ಶಿಷ್ಯರನ್ನಾಗಿ ಮಾಡಿರಿ. ತಂದೆಯ, ಮಗನ ಮತ್ತು
ಪವಿತ್ರಾತ್ಮನ ಹೆಸರಿನಲ್ಲಿ ಅವರಿಗೆಲ್ಲ ದೀಕ್ಷಾಸ್ನಾನ ಮಾಡಿಸಿ.
20ನಾನು ನಿಮಗೆ ಆಜ್ಞಾಪಿಸಿದವುಗಳಿಗೆಲ್ಲಾ ವಿಧೇಯರಾಗು
ವಂತೆ ಜನರಿಗೆ ಉಪದೇಶಿಸಿ, ಲೋಕಾಂತ್ಯದವರೆಗೂ ಸದಾಕಾಲ
ನಾನು ನಿಮ್ಮೊಂದಿಗಿರುತ್ತೇನೆ'' ಎಂದು ಹೇಳಿದನು.

# ಮಾರ್ಕನ ಸುವಾರ್ತೆ

### ಯೇಸುವಿನ ಆಗಮನ
(ಮತ್ತಾಯ 3:1-12; ಲೂಕ 3:1-9, 15-17; ಯೋಹಾನ 1:19-28)

1 ದೇವಕುಮಾರನಾದ ಯೇಸು ಕ್ರಿಸ್ತನನ್ನು ಕುರಿತ
ಸುವಾರ್ತೆಯ ಆರಂಭವಿದು. 2ಪ್ರವಾದಿಯಾದ
ಯೆಶಾಯನು ತನ್ನ ಪ್ರವಾದನೆಯ ಗ್ರಂಥದಲ್ಲಿ ಹೀಗೆ
ಬರೆದಿದ್ದಾನೆ:

> ‘‘ಆಲಿಸಿರಿ! ನಾನು ನನ್ನ ಸಂದೇಶಕನನ್ನು ನಿನ್ನ
> ಮುಂದೆ ಕಳುಹಿಸುತ್ತೇನೆ. ಅವನು ನಿನಗಾಗಿ
> ಮಾರ್ಗವನ್ನು ಸಿದ್ಧಪಡಿಸುತ್ತಾನೆ.’’
>
> *ಮಲಾಕಿ 3:1*

> 3 ‘‘ಪ್ರಭುವಿಗಾಗಿ ಮಾರ್ಗವನ್ನು ಸಿದ್ಧಗೊಳಿಸಿರಿ,
> ಆತನ ದಾರಿಯನ್ನು ಸುಗಮಗೊಳಿಸಿರಿ’ ಎಂದು
> ಒಬ್ಬ ವ್ಯಕ್ತಿಯು ಅಡವಿಯಲ್ಲಿ ಕೂಗುತ್ತಿದ್ದಾನೆ.’’
>
> *ಯೆಶಾಯ 40:3*

4ಅಂತೆಯೇ ಸ್ನಾನಿಕ ಯೋಹಾನನು ಬಂದು, ಅಡವಿಯಲ್ಲಿ
ಜನರಿಗೆ, ‘‘ನೀವು ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು
ದೇವರ ಕಡೆಗೆ ತಿರುಗಿಕೊಂಡು ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ.
ಆಗ ನಿಮಗೆ ಪಾಪಕ್ಷಮೆ ಆಗುವುದು’’ ಎಂದು ಉಪದೇಶಿಸು
ತ್ತಿದ್ದನು ಮತ್ತು ದೀಕ್ಷಾಸ್ನಾನ ಕೊಡುತ್ತಾ ಇದ್ದನು. 5ಜುದೇಯ
ಮತ್ತು ಜೆರುಸಲೇಮಿನ ಜನರೆಲ್ಲರೂ ಯೋಹಾನನ ಬಳಿಗೆ
ಬಂದು ತಮ್ಮ ಪಾಪಗಳನ್ನು ಅರಿಕೆ ಮಾಡಿಕೊಂಡರು. ಆಗ
ಯೋಹಾನನು ಅವರಿಗೆ ಜೋರ್ಡನ್ ನದಿಯಲ್ಲಿ ದೀಕ್ಷಾಸ್ನಾನ
ಕೊಟ್ಟನು. 6ಯೋಹಾನನು ಒಂಟೆಯ ತುಪ್ಪಟದಿಂದ ಮಾಡಿದ
ಹೊದಿಕೆಯನ್ನು ಹೊದ್ದುಕೊಂಡು ಸೊಂಟಕ್ಕೆ ತೊಗಲಿನ ನಡು
ಪಟ್ಟಿಯನ್ನು ಕಟ್ಟಿಕೊಳ್ಳುತ್ತಿದ್ದನು. ಅವನು ಮಿಡತೆಗಳನ್ನು ಮತ್ತು
ಕಾಡುಜೇನನ್ನು ತಿನ್ನುತ್ತಿದ್ದನು. 7ಯೋಹಾನನು ಜನರಿಗೆ, ‘‘ನನ್ನ
ತರುವಾಯ ಬರುವಾತನು ನನಗಿಂತಲೂ ಶಕ್ತನಾಗಿದ್ದಾನೆ.
ನಾನು ಮೊಣಕಾಲೂರಿ, ಆತನ ಪಾದರಕ್ಷೆಗಳನ್ನು ಬಿಚ್ಚು
ವುದಕ್ಕೂ ಯೋಗ್ಯನಲ್ಲ. 8ನಾನು ನಿಮಗೆ ನೀರಿನಲ್ಲಿ ದೀಕ್ಷಾಸ್ನಾನ
ಮಾಡಿಸುತ್ತೇನೆ, ಆದರೆ ಆತನು ನಿಮಗೆ ಪವಿತ್ರಾತ್ಮನಲ್ಲಿ
ದೀಕ್ಷಾಸ್ನಾನ ಮಾಡಿಸುತ್ತಾನೆ’’ ಎಂದು ಬೋಧಿಸಿದನು.

### ಯೇಸುವಿಗೆ ದೀಕ್ಷಾಸ್ನಾನ
(ಮತ್ತಾಯ 3:13-17; ಲೂಕ 3:21-22)

9ಆ ದಿನಗಳಲ್ಲಿ ಯೇಸು ಗಲಿಲೇಯದ ನಜರೇತಿನಿಂದ
ಯೋಹಾನನಿದ್ದ ಸ್ಥಳಕ್ಕೆ ಬಂದನು. ಯೋಹಾನನು ಯೇಸುವಿಗೆ
ಜೋರ್ಡನ್ ನದಿಯಲ್ಲಿ ದೀಕ್ಷಾಸ್ನಾನ ಮಾಡಿಸಿದನು.
10ಯೇಸು ನೀರಿನಿಂದ ಮೇಲಕ್ಕೆ ಬರುತ್ತಿದ್ದಾಗ, ಆಕಾಶವು ತೆರೆದಿ
ರುವುದನ್ನೂ ಪವಿತ್ರಾತ್ಮನು ತನ್ನ ಮೇಲೆ ಪಾರಿವಾಳದ ರೂಪ
ದಲ್ಲಿ ಇಳಿದು ಬರುತ್ತಿರುವುದನ್ನೂ ಕಂಡನು. 11ಆಗ ಪರಲೋಕ
ದಿಂದ ಧ್ವನಿಯೊಂದು ಹೊರಟು, ‘‘ನೀನೇ ನನ್ನ ಪ್ರಿಯ ಮಗನು.
ನಾನು ನಿನ್ನನ್ನು ಮೆಚ್ಚಿಕೊಂಡಿದ್ದೇನೆ’’ ಎಂದು ಹೇಳಿತು.

### ಯೇಸುವಿಗಾದ ಪರಿಶೋಧನೆ
(ಮತ್ತಾಯ 4:1-11; ಲೂಕ 4:1-13)

12ಆಗ ದೇವರಾತ್ಮನು ಯೇಸುವನ್ನು ಅಡವಿಗೆ ನಡೆಸಿದನು.
13ಯೇಸು ಅಲ್ಲಿ ನಲವತ್ತು ದಿನಗಳ ಕಾಲ ಕಾಡುಮೃಗ
ಗಳೊಂದಿಗಿದ್ದು ಸೈತಾನನಿಂದ ಪರಿಶೋಧಿಸಲ್ಪಟ್ಟನು. ಬಳಿಕ
ದೇವದೂತರು ಬಂದು ಯೇಸುವಿಗೆ ಉಪಚಾರ ಮಾಡಿದರು.

### ಪ್ರಥಮ ಶಿಷ್ಯರ ಆಯ್ಕೆ
(ಮತ್ತಾಯ 4:12-22; ಲೂಕ 4:14-15; 5:1-11)

14ಯೋಹಾನನನ್ನು ಸೆರೆಮನೆಗೆ ಹಾಕಿದ ಮೇಲೆ, ಯೇಸು
ಗಲಿಲೇಯಕ್ಕೆ ಹೋಗಿ ಜನರಿಗೆ, 15‘‘ಕಾಲ ಪರಿಪೂರ್ಣ
ವಾಯಿತು. ದೇವರ ರಾಜ್ಯ ಸಮೀಪಿಸಿತು. ನಿಮ್ಮ ಪಾಪಗಳಿಗಾಗಿ
ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಂಡು ಸುವಾರ್ತೆ
ಯನ್ನು ನಂಬಿರಿ’’ ಎಂಬ ದೇವರ ಸುವಾರ್ತೆಯನ್ನು ಉಪ
ದೇಶಿಸಿದನು.

16ಯೇಸು ಗಲಿಲೇಯ ಸರೋವರದ ಬಳಿ ನಡೆದು
ಹೋಗುತ್ತಿದ್ದಾಗ ಸೀಮೋನನನ್ನು ಮತ್ತು ಸೀಮೋನನ
ಸಹೋದರನಾದ ಅಂದ್ರೆಯನನ್ನು ಕಂಡನು. ಇವರಿಬ್ಬರೂ
ಬೆಸ್ತರಾಗಿದ್ದರು. ಇವರು ಮೀನನ್ನು ಹಿಡಿಯಲು ಸರೋವರ
ದೊಳಕ್ಕೆ ಬಲೆಯನ್ನು ಬೀಸುತ್ತಿದ್ದರು. 17ಯೇಸು, ‘‘ಬನ್ನಿರಿ,
ನನ್ನನ್ನು ಹಿಂಬಾಲಿಸಿರಿ, ನಾನು ನಿಮ್ಮನ್ನು ಬೇರೆ ವಿಧದ
ಬೆಸ್ತರನ್ನಾಗಿ ಮಾಡುವೆನು. ಇನ್ನು ಮೇಲೆ ನೀವು ಒಂದು
ಗೂಡಿಸುವುದು ಜನರನ್ನೇ, ಮೀನುಗಳನ್ನಲ್ಲ’’ ಎಂದು ಅವರಿಗೆ
ಹೇಳಿದನು.

18ಆಗ ಅವರು ತಮ್ಮ ಬಲೆಗಳನ್ನು ಅಲ್ಲಿಯೇ ಬಿಟ್ಟು
ಆತನನ್ನು ಹಿಂಬಾಲಿಸಿದರು.

19ಯೇಸು ಗಲಿಲೇಯ ಸರೋವರದ ಬಳಿಯಲ್ಲಿ ಇನ್ನೂ
ತಿರುಗಾಡುತ್ತಲೇ ಇದ್ದಾಗ ಜೆಬೆದಾಯನ ಮಕ್ಕಳಾದ
ಯಾಕೋಬ ಮತ್ತು ಯೋಹಾನರೆಂಬ ಇಬ್ಬರು ಸಹೋದರ
ರನ್ನು ಕಂಡನು. ಅವರು ಮೀನನ್ನು ಹಿಡಿಯಲು ಬಲೆಯನ್ನು
ಸಿದ್ಧಪಡಿಸುತ್ತಾ ತಮ್ಮ ದೋಣಿಯಲ್ಲಿದ್ದರು. 20ಅವರ

ತಂದೆಯಾದ ಜೆಬೆದಾಯನೂ ಅವನ ಕೆಲಸಗಾರರೂ
ಸಹೋದರರೊಂದಿಗೆ ದೋಣಿಯಲ್ಲಿದ್ದರು. ಯೇಸು ಅವರನ್ನು
ಕರೆದನು. ಕೂಡಲೇ, ಅವರು ತಮ್ಮ ತಂದೆಯನ್ನು ಬಿಟ್ಟು
ಯೇಸುವನ್ನು ಹಿಂಬಾಲಿಸಿದರು.

### ದೆವ್ವದಿಂದ ಪೀಡಿತನಾಗಿದ್ದವನಿಗೆ ವಿಮೋಚನೆ

(ಲೂಕ 4:31-37)

21ಯೇಸು ಮತ್ತು ಆತನ ಶಿಷ್ಯರು ಕಪೆರ್ನೌಮಿಗೆ
ಹೋದರು. ಸಬ್ಬತ್‌ದಿನದಂದು ಯೇಸು ಸಭಾಮಂದಿರಕ್ಕೆ
ಹೋಗಿ ಜನರಿಗೆ ಉಪದೇಶಮಾಡಿದನು. 22ಯೇಸುವಿನ
ಉಪದೇಶವನ್ನು ಕೇಳಿ ಅಲ್ಲಿದ್ದ ಜನರು ಆಶ್ಚರ್ಯಗೊಂಡರು.
ಆತನು ಅವರ ಧರ್ಮೋಪದೇಶಕರಂತೆ ಉಪದೇಶಮಾಡದೆ,
ಅಧಿಕಾರವುಳ್ಳವನಂತೆ ಉಪದೇಶಮಾಡಿದನು. 23ಯೇಸು ಸಭಾ
ಮಂದಿರದಲ್ಲಿದ್ದಾಗ, ದೆವ್ವದಿಂದ ಪೀಡಿತನಾಗಿದ್ದ ಒಬ್ಬ
ಮನುಷ್ಯನು ಅಲ್ಲಿದ್ದನು. ಅವನು, 24“ನಜರೇತಿನ ಯೇಸುವೇ!
ನಮ್ಮಿಂದ ನಿನಗೆ ಏನಾಗಬೇಕಾಗಿದೆ? ನಮ್ಮನ್ನು ನಾಶಗೊಳಿ
ಸಲು ಬಂದಿರುವೆಯಾ? ನೀನು ದೇವರಿಂದ ಬಂದ ಪರಿಶುದ್ಧ
ನೆಂದು ನನಗೆ ಗೊತ್ತಿದೆ!” ಎಂದು ಕೂಗಿಕೊಂಡನು.
25ಯೇಸು, “ಸುಮ್ಮನಿರು! ಅವನೊಳಗಿಂದ ಹೊರಗೆ
ಬಾ!” ಎಂದು ಆಜ್ಞಾಪಿಸಿದನು. 26ದೆವ್ವವು ಅವನನ್ನು ಒದ್ದಾಡಿಸಿ
ಗಟ್ಟಿಯಾಗಿ ಅರಚುತ್ತಾ ಅವನೊಳಗಿಂದ ಹೊರಬಂದಿತು.
27ಜನರೆಲ್ಲರೂ ದಿಗ್ಭ್ರಮೆಗೊಂಡು, “ಇದೇನು? ಹೊಸ
ದೊಂದನ್ನು ಈತನು ಅಧಿಕಾರದಿಂದ ಉಪದೇಶಿಸುತ್ತಿದ್ದಾನೆ!
ಈತನ ಆಜ್ಞೆಗೆ ದೆವ್ವಗಳೂ ವಿಧೇಯವಾಗುತ್ತಿವೆ” ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು. 28ಯೇಸುವಿನ ಸುದ್ದಿಯು
ಗಲಿಲಾಯ ಪ್ರದೇಶದ ಎಲ್ಲೆಡೆಯಲ್ಲಿಯೂ ಹರಡಿತು.

### ಅನೇಕರಿಗೆ ಸ್ವಸ್ಥತೆ

(ಮತ್ತಾಯ 8:14-17; ಲೂಕ 4:38-41)

29ಯೇಸು ಮತ್ತು ಆತನ ಶಿಷ್ಯರು ಸಭಾಮಂದಿರದಿಂದ
ಹೊರಟು ಯಾಕೋಬ ಮತ್ತು ಯೋಹಾನರ ಸಂಗಡ
ಸೀಮೋನ ಮತ್ತು ಅಂದ್ರೆಯರ ಮನೆಗೆ ಹೋದರು.
30ಸೀಮೋನನ ಅತ್ತೆ ಜ್ವರದಿಂದ ಹಾಸಿಗೆಯಲ್ಲಿ ಮಲಗಿದ್ದಳು.
ಅಲ್ಲಿನ ಜನರು ಅವಳ ಬಗ್ಗೆ ಯೇಸುವಿಗೆ ಹೇಳಿದರು.
31ಆದ್ದರಿಂದ ಯೇಸು ಅವಳ ಹಾಸಿಗೆಯ ಬಳಿ ಹೋಗಿ ಆಕೆಯ
ಕೈಗಳನ್ನು ಹಿಡಿದುಕೊಂಡು, ಮೇಲೇಳಲು ಸಹಾಯ
ಮಾಡಿದನು. ಕೂಡಲೇ ಅವಳಿಗೆ ಗುಣವಾಯಿತು. ಆಕೆ ಎದ್ದು
ಅವರಿಗೆ ಉಪಚಾರ ಮಾಡಿದಳು.
32ಅಂದು ಸೂರ್ಯನು ಮುಳುಗಿದ ಮೇಲೆ, ಜನರು
ಕಾಯಿಲೆಯವರನ್ನೂ ದೆವ್ವಗಳಿಂದ ಪೀಡಿತರಾಗಿದ್ದವರನ್ನೂ
ಆತನ ಬಳಿಗೆ ಕರೆತಂದರು. 33ಊರಿನ ಜನರೆಲ್ಲರೂ ಆ ಮನೆಯ
ಮುಂದೆ ಒಟ್ಟುಗೂಡಿದರು.
34ಯೇಸು ನಾನಾ ಬಗೆಯ ರೋಗಗಳಿಂದ ನರಳುತ್ತಿದ್ದ
ಅನೇಕ ಜನರನ್ನು ಗುಣಪಡಿಸಿದನು; ದೆವ್ವಗಳಿಂದ
ಪೀಡಿತರಾಗಿದ್ದ ಅನೇಕರನ್ನು ಬಿಡಿಸಿದನು. ಆದರೆ ಆ ದೆವ್ವಗಳಿಗೆ
ಮಾತನಾಡಲು ಆತನು ಅವಕಾಶಕೊಡಲಿಲ್ಲ; ಏಕೆಂದರೆ ಯೇಸು
ಯಾರೆಂಬುದು ದೆವ್ವಗಳಿಗೆ ಗೊತ್ತಿತ್ತು.

### ಸುವಾರ್ತೆ ಸಾರಲು ಯೇಸುವಿನ ಸಿದ್ಧತೆ

(ಲೂಕ 4:42-44)

35ಮರುದಿನ ಮುಂಜಾನೆ, ಇನ್ನೂ ಕತ್ತಲೆ ಇರುವಾಗಲೇ
ಯೇಸು ಎದ್ದು ಪ್ರಾರ್ಥಿಸುವುದಕ್ಕಾಗಿ ಏಕಾಂತವಾದ ಸ್ಥಳಕ್ಕೆ
ಹೋದನು. 36ತರುವಾಯ, ಸೀಮೋನ ಮತ್ತು ಅವನ
ಗೆಳೆಯರು ಯೇಸುವನ್ನು ಹುಡುಕುತ್ತಾ ಹೋದರು. 37ಅವರು
ಯೇಸುವನ್ನು ಕಂಡುಕೊಂಡು, “ಜನರೆಲ್ಲರೂ ನಿನ್ನನ್ನೇ
ಎದುರು ನೋಡುತ್ತಿದ್ದಾರೆ!” ಎಂದು ಹೇಳಿದರು.
38ಯೇಸು, “ಇಲ್ಲಿಗೆ ಸಮೀಪದಲ್ಲಿರುವ ಊರುಗಳಿಗೆ
ನಾವು ಹೋಗೋಣ. ಆ ಸ್ಥಳಗಳಲ್ಲಿಯೂ ನಾನು ಉಪದೇಶಿಸ
ಬೇಕು. ಅದಕ್ಕಾಗಿಯೇ ನಾನು ಇಲ್ಲಿಗೆ ಬಂದೆನು” ಎಂದು
ಹೇಳಿದನು. 39ಹೀಗೆ ಯೇಸು ಗಲಿಲಾಯದ ಎಲ್ಲಾ ಕಡೆಗೆ
ಪ್ರವಾಸಮಾಡಿ ಸಭಾಮಂದಿರಗಳಲ್ಲಿ ಉಪದೇಶಿಸಿದನು; ದೆವ್ವ
ಗಳಿಂದ ಪೀಡಿತರಾಗಿದ್ದವರನ್ನು ಬಿಡಿಸಿದನು.

### ಕುಷ್ಠರೋಗಿಗೆ ಸ್ವಸ್ಥತೆ

(ಮತ್ತಾಯ 8:1-4; ಲೂಕ 5:12-16)

40ಒಬ್ಬ ಕುಷ್ಠರೋಗಿಯು ಯೇಸುವಿನ ಬಳಿಗೆ ಬಂದು
ಮೊಣಕಾಲೂರಿ ಆತನಿಗೆ, “ನೀನು ಇಷ್ಟಪಟ್ಟರೆ, ನನ್ನನ್ನು ಗುಣ
ಪಡಿಸಬಲ್ಲೆ” ಎಂದು ಬೇಡಿಕೊಂಡನು.
41ಯೇಸು ಅವನಿಗಾಗಿ ದುಃಖಪಟ್ಟು ಅವನನ್ನು ಮುಟ್ಟಿ,
“ನಿನ್ನನ್ನು ಗುಣಪಡಿಸಲು ನನಗೆ ಇಷ್ಟವಿದೆ. ನಿನಗೆ ಗುಣ
ವಾಗಲಿ” ಎಂದು ಹೇಳಿದನು. 42ಆ ಕೂಡಲೇ ಅವನಿಗೆ
ಗುಣವಾಯಿತು.
43-44ಯೇಸು ಅವನಿಗೆ, “ನಾನು ನಿನ್ನನ್ನು ಗುಣಪಡಿಸಿದೆ
ನೆಂದು ಯಾರಿಗೂ ಹೇಳದೆ, ನೇರವಾಗಿ ಯಾಜಕನ ಬಳಿಗೆ
ಹೋಗಿ ಮೈ ತೋರಿಸು. ನೀನು ಗುಣಹೊಂದಿರುವುದರಿಂದ
ಮೋಶೆಯ ಆಜ್ಞಾನುಸಾರವಾಗಿ ದೇವರಿಗೆ ಕಾಣಿಕೆಯನ್ನು
ಅರ್ಪಿಸು. ನಿನಗೆ ಗುಣವಾಯಿತು ಎಂಬುದಕ್ಕೆ ಇದು ಜನರಿಗೆ
ಸಾಕ್ಷಿಯಾಗಿರುವುದು” ಎಂದು ಎಚ್ಚರಿಕೆ ನೀಡಿ ಕಳುಹಿಸಿ
ಬಿಟ್ಟನು. 45ಅವನು ಅಲ್ಲಿಂದ ಹೋಗಿ ಯೇಸುವೇ ತನ್ನನ್ನು
ಗುಣಪಡಿಸಿದನೆಂದು ಜನರೆಲ್ಲರಿಗೆ ತಿಳಿಸಿದನು. ಈ ಸುದ್ದಿಯು
ಎಲ್ಲೆಡೆ ಹರಡಿದ್ದರಿಂದ ಆತನು ಬಹಿರಂಗವಾಗಿ ಊರೊಳಗೆ
ಹೋಗಲು ಸಾಧ್ಯವಾಗದೆ ಏಕಾಂತವಾದ ಸ್ಥಳಗಳಲ್ಲಿ ವಾಸಿಸ
ಬೇಕಾಯಿತು. ಆದರೂ ಎಲ್ಲಾ ಕಡೆಗಳಿಂದ ಜನರು ಯೇಸು
ವಿದ್ದಲ್ಲಿಗೆ ಬರುತ್ತಿದ್ದರು.

### ಪಾರ್ಶ್ವವಾಯು ರೋಗಿಗೆ ಸ್ವಸ್ಥತೆ

(ಮತ್ತಾಯ 9:1-8; ಲೂಕ 5:17-26)

2 ಕೆಲವು ದಿನಗಳ ತರುವಾಯ, ಯೇಸು ಕಪೆರ್ನೌಮಿಗೆ
ಹಿಂದಿರುಗಿ ಬಂದನು. ಯೇಸು ಮನೆಯಲ್ಲಿದ್ದಾನೆಂಬ
ಸುದ್ದಿಯು ಹಬ್ಬಿತು. 2ಜನರು ಗುಂಪುಗುಂಪಾಗಿ ಯೇಸುವಿನ
ಉಪದೇಶವನ್ನು ಕೇಳಲು ಒಟ್ಟುಗೂಡಿದರು. ಮನೆಯು
ತುಂಬಿಹೋಯಿತು. ಅಲ್ಲಿ ನಿಲ್ಲಲು ಹೊರಗಡೆಯಲ್ಲಿಯೂ
ಸ್ಥಳವಿರಲಿಲ್ಲ. ಯೇಸು ಉಪದೇಶಿಸುತ್ತಿದ್ದನು. 3ಕೆಲವು ಜನರು
ಒಬ್ಬ ಪಾರ್ಶ್ವವಾಯು ರೋಗಿಯನ್ನು ಆತನ ಬಳಿಗೆ ತಂದರು.
ಅವನನ್ನು ನಾಲ್ಕುಮಂದಿ ಹೊತ್ತುಕೊಂಡಿದ್ದರು. 4ಮನೆಯ

ಜನರಿಂದ ತುಂಬಿ ಹೋಗಿದ್ದುದರಿಂದ ಅವರು ಅವನನ್ನು
ಯೇಸುವಿನ ಬಳಿಗೆ ತರಲಾಗಲಿಲ್ಲ. ಆದ್ದರಿಂದ ಅವರು
ಯೇಸುವಿದ್ದ ಮನೆಯ ಮೇಲ್ಚಾವಣೆಯ ಮೇಲಕ್ಕೆ ಹೋಗಿ
ಯೇಸುವಿದ್ದ ಸ್ಥಳದ ಮೇಲೆ ಹಂಚುಗಳನ್ನು ತೆಗೆದು ಹಾಕಿದರು.
ಹೀಗೆ ಅಲ್ಲಿ ಒಂದು ದ್ವಾರವನ್ನು ಮಾಡಿ ರೋಗಿಯನ್ನು
ಹಾಸಿಗೆಯ ಸಮೇತ ಕೆಳಗಿಳಿಸಿದರು. 5ಈ ಜನರ ದೊಡ್ಡ
ನಂಬಿಕೆಯನ್ನು ಕಂಡ ಯೇಸು ರೋಗಿಗೆ, ‘‘ಯುವಕನೇ, ನಿನ್ನ
ಪಾಪಗಳು ಕ್ಷಮಿಸಲ್ಪಟ್ಟಿವೆ’’ ಎಂದು ಹೇಳಿದನು. 6ಕೆಲವು ಮಂದಿ
ಧರ್ಮೋಪದೇಶಕರು ಅಲ್ಲಿ ಕುಳಿತಿದ್ದರು. ಯೇಸು ಹೇಳಿದ್ದನ್ನು
ಕೇಳಿದ ಅವರು, 7‘‘ಇವನು ಹೀಗೇಕೆ ಹೇಳುತ್ತಿದ್ದಾನೆ? ಇದು
ದೇವದೂಷಣೆ! ದೇವರೊಬ್ಬನೇ ಪಾಪಗಳನ್ನು ಕ್ಷಮಿಸಲು
ಸಾಧ್ಯ’’ ಎಂದು ತಮ್ಮ ಮನಸ್ಸಿನಲ್ಲಿ ಅಂದುಕೊಂಡರು.
8ಧರ್ಮೋಪದೇಶಕರ ಆಲೋಚನೆಯನ್ನು ತಕ್ಷಣವೇ
ಗ್ರಹಿಸಿಕೊಂಡ ಯೇಸು ಅವರಿಗೆ, ‘‘ನೀವು ಹೀಗೇಕೆ ಆಲೋಚಿ
ಸುತ್ತೀರಿ?

9ಯಾವುದು ಸುಲಭ? ‘ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ’
ಎಂದು ಹೇಳುವುದೋ? ಇಲ್ಲವೇ, ‘ಎದ್ದು ನಿನ್ನ ಹಾಸಿಗೆಯನ್ನು
ತೆಗೆದುಕೊಂಡು ಹೋಗು’ ಎಂದು ಹೇಳುವುದೋ? 10ಆದರೆ
ಮನುಷ್ಯಕುಮಾರನಿಗೆ ಭೂಲೋಕದಲ್ಲಿ ಪಾಪಗಳನ್ನು
ಕ್ಷಮಿಸುವ ಅಧಿಕಾರವಿದೆ ಎಂಬುದು ನಿಮಗೆ ತಿಳಿಯಬೇಕು’’
ಎಂದು ಹೇಳಿದನು. ಬಳಿಕ ಯೇಸು ರೋಗಿಗೆ, 11‘‘ನಾನು ನಿನಗೆ
ಹೇಳುತ್ತಿದ್ದೇನೆ, ಎದ್ದು, ನಿನ್ನ ಹಾಸಿಗೆಯನ್ನು ತೆಗೆದುಕೊಂಡು,
ಮನೆಗೆ ಹೋಗು’’ ಎಂದನು. 12ಆ ಕೂಡಲೇ ರೋಗಿಯು
ಎದ್ದುನಿಂತು ತನ್ನ ಹಾಸಿಗೆಯನ್ನು ತೆಗೆದುಕೊಂಡು, ಅಲ್ಲಿಂದ
ಹೊರಗೆ ಹೋದನು. ಇದನ್ನು ಕಂಡ ಆ ಜನರೆಲ್ಲರೂ
ಆಶ್ಚರ್ಯಚಕಿತರಾಗಿ, ‘‘ನಾವು ಹಿಂದೆಂದೂ ಇಂಥ ಸಂಗತಿ
ಯನ್ನು ನೋಡಿಯೇ ಇಲ್ಲ’’ ಎಂದು ಹೇಳಿ ದೇವರನ್ನು
ಕೊಂಡಾಡಿದರು. 13ಯೇಸು ಮತ್ತೆ ಸರೋವರಕ್ಕೆ ಹೋದನು.
ಅನೇಕ ಜನರು ಆತನನ್ನು ಹಿಂಬಾಲಿಸಿ ಅಲ್ಲಿಗೆ ಹೋದದ್ದರಿಂದ
ಆತನು ಅವರಿಗೆ ಉಪದೇಶಿಸಿದನು. 14ಯೇಸು ಸರೋವರದ
ತೀರದಲ್ಲಿ ನಡೆದುಹೋಗುತ್ತಿದ್ದಾಗ ಸುಂಕ ವಸೂಲಿ
ಮಾಡುತ್ತಿದ್ದ ಅಲ್ಫಾಯನ ಮಗನಾದ ಲೇವಿಯನ್ನು ಕಂಡನು.
ಲೇವಿಯು ಸುಂಕದ ಕಟ್ಟೆಯಲ್ಲಿ ಕುಳಿತಿದ್ದನು. ಯೇಸು ಅವನಿಗೆ,
‘ನನ್ನನ್ನು ಹಿಂಬಾಲಿಸು’ ಎಂದು ಹೇಳಿದನು. ಆಗ ಅವನು ಎದ್ದು
ಯೇಸುವನ್ನು ಹಿಂಬಾಲಿಸಿದನು.

15ಅಂದು ಸ್ವಲ್ಪ ಹೊತ್ತಾದ ಬಳಿಕ ಯೇಸು ಲೇವಿಯ
ಮನೆಯಲ್ಲಿ ಊಟಮಾಡುತ್ತಿದ್ದನು. ಅಲ್ಲಿ ಅನೇಕ ಸುಂಕದ
ಅಧಿಕಾರಿಗಳು ಮತ್ತು ಇತರ ಕೆಟ್ಟ ಜನರು ಸಹ ಯೇಸು ಮತ್ತು
ಆತನ ಶಿಷ್ಯರ ಸಂಗಡ ಊಟಮಾಡುತ್ತಿದ್ದರು. ಈ ಜನರಲ್ಲಿ
ಅನೇಕರು ಯೇಸುವಿನ ಹಿಂಬಾಲಕರಾಗಿದ್ದರು. 16ಈ ಸುಂಕದ
ಅಧಿಕಾರಿಗಳೊಂದಿಗೆ ಮತ್ತು ಇತರ ಕೆಟ್ಟ ಜನರೊಂದಿಗೆ ಯೇಸು
ಊಟಮಾಡುತ್ತಿರುವುದನ್ನು ಧರ್ಮೋಪದೇಶಕರು ಮತ್ತು
ಫರಿಸಾಯರು ನೋಡಿ ಆತನ ಶಿಷ್ಯರಿಗೆ, ‘‘ಯೇಸು ಪಾಪಿ
ಗಳೊಂದಿಗೆ ಮತ್ತು ಸುಂಕದ ಅಧಿಕಾರಿಗಳೊಂದಿಗೆ ಏಕೆ ಊಟ
ಮಾಡುತ್ತಾನೆ?’’ ಎಂದು ಕೇಳಿದರು.

17ಬಳಿಕ ಯೇಸು ಅವರಿಗೆ, ‘‘ಆರೋಗ್ಯವಂತರಿಗೆ ವೈದ್ಯನ
ಅಗತ್ಯವಿಲ್ಲ, ಆರೋಗ್ಯವಿಲ್ಲದವರಿಗೆ ವೈದ್ಯನ ಅಗತ್ಯವಿದೆ. ನಾನು
ನೀತಿವಂತರನ್ನು ಕರೆಯಲು ಬರಲಿಲ್ಲ, ಪಾಪಿಗಳನ್ನು ಕರೆಯಲು
ಬಂದೆನು’’ ಎಂದು ಹೇಳಿದನು.

### ಯೇಸು ಇತರ ಧಾರ್ಮಿಕ ನಾಯಕರಂತಲ್ಲ

(ಮತ್ತಾಯ 9:14-17; ಲೂಕ 5:33-39)

18ಯೋಹಾನನ ಶಿಷ್ಯರು ಮತ್ತು ಫರಿಸಾಯರು ಉಪವಾಸ
ಮಾಡುತ್ತಿದ್ದರು. ಕೆಲವು ಜನರು ಯೇಸುವಿನ ಬಳಿಗೆ ಬಂದು,
‘‘ಯೋಹಾನನ ಶಿಷ್ಯರು ಹಾಗೂ ಫರಿಸಾಯರ ಹಿಂಬಾಲಕರು
ಉಪವಾಸ ಮಾಡುತ್ತಾರೆ. ಆದರೆ ನಿನ್ನ ಶಿಷ್ಯರು ಏಕೆ ಉಪವಾಸ
ಮಾಡುವುದಿಲ್ಲ?’’ ಎಂದು ಕೇಳಿದರು.

19ಯೇಸು, ‘‘ಮದುವೆಯಲ್ಲಿ ಮದುಮಗನು ತಮ್ಮ ಜೊತೆ
ಯಲ್ಲಿ ಇರುವಾಗ ಅವನ ಗೆಳೆಯರು ವ್ಯಸನಪಡುವುದಿಲ್ಲ.
ಉಪವಾಸ ಮಾಡುವುದಿಲ್ಲ. 20ಆದರೆ ಮದುಮಗನು ಅವರನ್ನು
ಬಿಟ್ಟುಹೋಗುವ ಕಾಲ ಬರುತ್ತದೆ. ಆಗ ಅವನ ಗೆಳೆಯರು
ವ್ಯಸನಪಡುತ್ತಾರೆ, ಉಪವಾಸ ಮಾಡುತ್ತಾರೆ.

21‘‘ಒಬ್ಬ ವ್ಯಕ್ತಿಯು ತನ್ನ ಹಳೆಯ ಮೇಲಂಗಿಯ ಹರಕಿಗೆ
ಹೊಸಬಟ್ಟೆಯನ್ನು ತೇಪೆ ಹಚ್ಚುವುದಿಲ್ಲ. ಒಂದು ವೇಳೆ ಹಚ್ಚಿದರೆ,
ಆ ತೇಪೆಯು ಹಿಂಜಿಕೊಂಡು ಆ ಹರಕನ್ನು ಮತ್ತಷ್ಟು
ದೊಡ್ಡದನ್ನಾಗಿ ಮಾಡುತ್ತದೆ. 22ಹಾಗೆಯೇ, ಜನರು ಹೊಸ
ದ್ರಾಕ್ಷಾರಸವನ್ನು ಹಳೆಯ ಬುದ್ದಲಿಗಳಲ್ಲಿ ಹಾಕಿಡುವುದಿಲ್ಲ.
ಏಕೆಂದರೆ ಅದು ಬುದ್ದಲಿಗಳನ್ನು ಒಡೆದುಹಾಕುವುದರಿಂದ
ದ್ರಾಕ್ಷಾರಸವೂ ಹಾಳಾಗುತ್ತದೆ. ಆದ್ದರಿಂದ ಜನರು ಯಾವಾ
ಗಲೂ ಹೊಸ ದ್ರಾಕ್ಷಾರಸವನ್ನು ಹೊಸ ಬುದ್ದಲಿಗಳಲ್ಲಿ ಹಾಕಿಡು
ತ್ತಾರೆ’’ ಎಂದು ಉತ್ತರಕೊಟ್ಟನು.

### ಕೆಲವು ಯೆಹೂದ್ಯರು ಯೇಸುವಿನ ಕುರಿತು ಮಾಡಿದ ಟೀಕೆ

(ಮತ್ತಾಯ 12:1-8; ಲೂಕ 6:1-5)

23ಸಬ್ಬತ್ ದಿನದಂದು, ಯೇಸು ತನ್ನ ಶಿಷ್ಯರೊಂದಿಗೆ ಕೆಲವು
ಹೊಲಗಳ ಮೂಲಕ ಹಾದುಹೋಗುತ್ತಿದ್ದನು. ಶಿಷ್ಯರು ತಿನ್ನಲು
ಕೆಲವು ಕಾಳಿನ ತೆನೆಗಳನ್ನು ಕಿತ್ತುಕೊಂಡರು. 24ಫರಿಸಾಯರು
ಇದನ್ನು ಕಂಡು ಯೇಸುವಿಗೆ, ‘‘ನಿನ್ನ ಶಿಷ್ಯರು ಹೀಗೇಕೆ ಮಾಡು
ತ್ತಾರೆ? ಸಬ್ಬತ್ ದಿನದಂದು ಹೀಗೆ ಮಾಡುವುದು ಯೆಹೂದ್ಯರ
ನಿಯಮಗಳಿಗೆ ವಿರುದ್ಧವಲ್ಲವೆ?’’ ಎಂದು ಕೇಳಿದರು.

25ಯೇಸು ಅವರಿಗೆ, ‘‘ದಾವೀದನು ಮತ್ತು ಅವನ ಜನರು
ಹಸಿದು ಆಹಾರವನ್ನು ಬಯಸಿದಾಗ ಅವನೇನು ಮಾಡಿದನೆಂಬು
ದನ್ನು ನೀವು ಓದಿದ್ದೀರಿ. 26ಅದು ಮಹಾಯಾಜಕನಾದ
ಅಬಿಯಾತರನ ಕಾಲ. ದಾವೀದನು ದೇವಾಲಯಕ್ಕೆ ಹೋಗಿ,
ದೇವರಿಗೆ ಅರ್ಪಿಸಿದ ರೊಟ್ಟಿಯನ್ನು ತಿಂದನು. ಯಾಜಕರು
ಮಾತ್ರ ಆ ರೊಟ್ಟಿಯನ್ನು ತಿನ್ನತಕ್ಕದ್ದೆಂದು ಮೋಶೆಯ ಧರ್ಮ
ಶಾಸ್ತ್ರ ಹೇಳುತ್ತದೆ. ದಾವೀದನು ತನ್ನೊಂದಿಗಿದ್ದ ಜನರಿಗೂ ಆ
ರೊಟ್ಟಿಯನ್ನು ನೀಡಿದನು’’ ಎಂದು ಉತ್ತರ ಕೊಟ್ಟನು.

27ನಂತರ ಯೇಸು ಫರಿಸಾಯರಿಗೆ, ‘‘ಸಬ್ಬತ್ ದಿನವನ್ನು
ನಿರ್ಮಾಣ ಮಾಡಿರುವುದು ಜನರ ಸಹಾಯಕ್ಕಾಗಿ. ಆದರೆ
ಜನರನ್ನು ಸೃಷ್ಟಿಸಿರುವುದು ಸಬ್ಬತ್ ದಿನಕ್ಕೆ ಅವರು ಅಧೀನ
ರಾಗಿರಲಿ ಎಂದಲ್ಲ. 28ಆದ್ದರಿಂದ ಮನುಷ್ಯಕುಮಾರನು ಸಬ್ಬತ್
ದಿನಕ್ಕೂ ಉಳಿದೆಲ್ಲ ದಿನಗಳಿಗೂ ಪ್ರಭುವಾಗಿದ್ದಾನೆ’’ ಎಂದು
ಹೇಳಿದನು.

### ಕೈ ಬತ್ತಿದವನಿಗೆ ಸ್ವಸ್ಥತೆ
(ಮತ್ತಾಯ 12:9-14; ಲೂಕ 6:6-11)

3 ಮತ್ತೊಂದು ದಿನದಲ್ಲಿ, ಯೇಸು ಸಭಾಮಂದಿರದೊಳಕ್ಕೆ
ಹೋದನು. ಅಲ್ಲಿ ಕೈಬತ್ತಿದ್ದ ಒಬ್ಬ ಮನುಷ್ಯನಿದ್ದನು.
2ಅಲ್ಲಿದ್ದ ಕೆಲವು ಯೆಹೂದ್ಯರು, ಯೇಸುವನ್ನು ದೂಷಿಸು
ವುದಕ್ಕಾಗಿ ಆತನಲ್ಲಿ ಏನಾದರೂ ತಪ್ಪನ್ನು ಕಂಡುಹಿಡಿಯಲು
ಎದುರು ನೋಡುತ್ತಿದ್ದರು. ಸಬ್ಬತ್‌ದಿನದಂದು ಆ ಮನುಷ್ಯ
ನನ್ನು ಯೇಸು ಗುಣಪಡಿಸಬಹುದೆಂದು ಅವರು ಆತನ ಸಮೀಪ
ದಲ್ಲಿಯೇ ಇದ್ದರು. 3ಯೇಸು ಕೈಬತ್ತಿದ್ದ ಆ ಮನುಷ್ಯನಿಗೆ,
''ಎದ್ದುನಿಲ್ಲು, ಜನರೆಲ್ಲರೂ ನಿನ್ನನ್ನು ನೋಡಲಿ'' ಎಂದು
ಹೇಳಿದನು.

4ನಂತರ ಯೇಸು ಜನರಿಗೆ, ''ಸಬ್ಬತ್‌ದಿನದಂದು ಯಾವ
ಕಾರ್ಯಗಳನ್ನು ಮಾಡಬೇಕು? ಒಳ್ಳೆಯ ಕಾರ್ಯವನ್ನೇ? ಕೆಟ್ಟ
ಕಾರ್ಯವನ್ನೇ? ಒಂದು ಜೀವವನ್ನು ರಕ್ಷಿಸಬೇಕೇ? ಅಥವಾ
ನಾಶಪಡಿಸಬೇಕೇ?'' ಎಂದು ಕೇಳಿದನು. ಆಗ ಅವರು ಏನೂ
ಉತ್ತರಕೊಡಲಾರದೆ ಮೌನವಾಗಿದ್ದರು.

5ಯೇಸು ಕೋಪಗೊಂಡು ಜನರ ಕಡೆಗೆ ನೋಡಿದನು.
ಅವರ ಮೊಂಡುತನವನ್ನು ಕಂಡು ಆತನಿಗೆ ದುಃಖವಾಯಿತು.
ಯೇಸು ಆ ಮನುಷ್ಯನಿಗೆ, 'ನಿನ್ನ ಕೈ ಚಾಚು'' ಎಂದು ಹೇಳಿದನು.
ಅವನು ತನ್ನ ಕೈಯನ್ನು ಯೇಸುವಿನತ್ತ ಚಾಚಿದನು. ಕೂಡಲೇ
ಅವನ ಕೈ ವಾಸಿಯಾಯಿತು. 6ಆಗ ಫರಿಸಾಯರು ಹೊರಗೆ
ಹೋಗಿ, ಹೆರೋದ್ಯರನ್ನು ಕೂಡಿಕೊಂಡು ಯೇಸುವನ್ನು ಯಾವ
ರೀತಿ ಕೊಲ್ಲಬೇಕೆಂದು ಆಲೋಚಿಸಿದರು.

### ಯೇಸುವನ್ನು ಹಿಂಬಾಲಿಸಿದ ಜನ ಸಮೂಹ

7ಯೇಸು ತನ್ನ ಶಿಷ್ಯರೊಂದಿಗೆ ಸರೋವರಕ್ಕೆ ಹೊರಟು
ಹೋದನು. ಗಲಿಲೇಯದ ಅನೇಕ ಜನರು ಆತನನ್ನು
ಹಿಂಬಾಲಿಸಿದರು. 8ಅನೇಕಾನೇಕ ಜನರು ಜುದೇಯದಿಂದ,
ಜೆರುಸಲೇಮಿನಿಂದ, ಇದೂಮಾಯದಿಂದ, ಜೋರ್ಡನ್
ನದಿಯ ಆಚೆಗಿರುವ ಪ್ರದೇಶದಿಂದ ಮತ್ತು ಟೈರ್, ಸೀದೋನ್
ಗಳ ಸುತ್ತಲಿನ ಪ್ರದೇಶಗಳಿಂದ ಬಂದರು. ಯೇಸುವು
ಮಾಡುತ್ತಿದ್ದ ಕಾರ್ಯಗಳ ಬಗ್ಗೆ ಅವರು ಕೇಳಿ ಬಂದಿದ್ದರು.
9ಯೇಸು ಈ ಜನ ಸಮೂಹವನ್ನು ನೋಡಿ ಅವರು ತನ್ನ
ಮೈಮೇಲೆ ಬಿದ್ದು ನೂಕಬಹುದೆಂದು ತನಗಾಗಿ ಒಂದು ಚಿಕ್ಕ
ದೋಣಿಯನ್ನು ತಂದು ಅದನ್ನು ಸಿದ್ಧಪಡಿಸುವಂತೆ ತನ್ನ ಶಿಷ್ಯರಿಗೆ
ಹೇಳಿದನು. 10ಯೇಸು ಅನೇಕ ಜನರನ್ನು ಗುಣಪಡಿಸಿದ್ದನು.
ಆದ್ದರಿಂದ ಕಾಯಿಲೆಯಾಗಿದ್ದ ಜನರೆಲ್ಲರೂ ಆತನನ್ನು
ಮುಟ್ಟುವುದಕ್ಕಾಗಿ ಆತನ ಮೇಲೆ ಬೀಳುತ್ತಿದ್ದರು. ದೆವ್ವಗಳಿಂದ
ಪೀಡಿತರಾಗಿದ್ದ ಕೆಲವು ಜನರು ಅಲ್ಲಿದ್ದರು. 11ದೆವ್ವಗಳು
ಯೇಸುವನ್ನು ನೋಡಿ, ಆತನ ಮುಂದೆ ಅಡ್ಡಬಿದ್ದು ನಮಸ್ಕರಿಸಿ,
''ನೀನು ದೇವಕುಮಾರ'' ಎಂದು ಜೋರಾಗಿ ಕೂಗುತ್ತಿದ್ದವು.
12ಆದರೆ ಯೇಸು ತಾನು ಯಾರೆಂಬುದನ್ನು ಜನರಿಗೆ ತಿಳಿಸ
ಬಾರದೆಂದು ಅವುಗಳಿಗೆ ಖಂಡಿತವಾಗಿ ಆಜ್ಞಾಪಿಸಿದನು.

### ಹನ್ನೆರಡು ಮಂದಿ ಅಪೊಸ್ತಲರ ಆಯ್ಕೆ
(ಮತ್ತಾಯ 10:1-4; ಲೂಕ 6:12-16)

13ನಂತರ ಯೇಸು ಒಂದು ಬೆಟ್ಟದ ಮೇಲಕ್ಕೆ ಹೋದನು.
ಯೇಸು ಕೆಲವು ಜನರಿಗೆ ತನ್ನೊಂದಿಗೆ ಬರಲು ಹೇಳಿದನು.
ಯೇಸು ಅಪೇಕ್ಷಿಸಿದ ಜನರು ಇವರೇ. ಈ ಜನರು ಯೇಸುವಿ
ನೊಂದಿಗೆ ಮೇಲಕ್ಕೆ ಹೋದರು. 14ಆತನು ಅವರಲ್ಲಿ ಹನ್ನೆರಡು
ಮಂದಿಯನ್ನು ತನ್ನ ಅಪೊಸ್ತಲರನ್ನಾಗಿ ಆರಿಸಿಕೊಂಡನು. ಈ
ಹನ್ನೆರಡು ಮಂದಿ ತನ್ನೊಂದಿಗಿರಬೇಕೆಂಬುದು ಮತ್ತು
ಉಪದೇಶ ಮಾಡುವುದಕ್ಕಾಗಿ ಅವರನ್ನು ಬೇರೆ ಸ್ಥಳಗಳಿಗೆ
ಕಳುಹಿಸಬೇಕೆಂಬುದು 15ಅಲ್ಲದೆ ದೆವ್ವಗಳಿಂದ ಪೀಡಿತ
ರಾಗಿರುವ ಜನರನ್ನು ಅವುಗಳಿಂದ ಬಿಡಿಸುವುದಕ್ಕೆ ಅವರಿಗೆ
ಅಧಿಕಾರ ಕೊಡಬೇಕೆಂಬುದು ಆತನ ಅಪೇಕ್ಷೆಯಾಗಿತ್ತು.
16ಯೇಸುವು ಈ ಹನ್ನೆರಡು ಮಂದಿಯನ್ನು ಆರಿಸಿಕೊಂಡನು:
ಸೀಮೋನ (ಯೇಸು ಅವನಿಗೆ ಪೇತ್ರನೆಂದು ಹೆಸರನ್ನಿತ್ತನು),
17ಜೆಬೆದಾಯನ ಮಕ್ಕಳಾದ ಯಾಕೋಬ ಮತ್ತು ಯೋಹಾನ
(ಯೇಸು ಅವರಿಗೆ ಬೊವನೆರ್ಗೆಸ್‌ಎಂಬ ಹೆಸರನ್ನಿತ್ತನು. ಈ
ಹೆಸರಿಗೆ 'ಸಿಡಿಲಿನ ಜನರು' ಎಂದರ್ಥ.), 18ಅಂದ್ರೆಯ, ಫಿಲಿಪ್ಪ,
ಬಾರ್ತೊಲೊಮಾಯ, ಮತ್ತಾಯ, ತೋಮ, ಅಲ್ಫಾಯನ
ಮಗನಾದ ಯಾಕೋಬ, ತದ್ದಾಯ, ದೇಶಾಭಿಮಾನಿಯಾದ
ಸೀಮೋನ 19ಮತ್ತು ಇಸ್ಕರಿಯೋತ ಯೂದ. ಯೇಸುವನ್ನು
ಆತನ ವೈರಿಗಳಿಗೆ ಒಪ್ಪಿಸಿದವನೇ ಯೂದ.

### ಯೇಸುವಿಗೆ ದೆವ್ವಹಿಡಿದಿದೆ ಎಂಬ ಆರೋಪ
(ಮತ್ತಾಯ 12:22-32; ಲೂಕ 11:14-23; 12:10)

20ನಂತರ ಯೇಸು ಮನೆಗೆ ಹೋದನು. ಮತ್ತೆ ಅನೇಕ
ಜನರು ಅಲ್ಲಿಗೆ ಸೇರಿಬಂದರು. ಆದ್ದರಿಂದ ಯೇಸು ಮತ್ತು ಆತನ
ಶಿಷ್ಯರು ಊಟಮಾಡಲೂ ಸಾಧ್ಯವಾಗಲಿಲ್ಲ. 21ಯೇಸುವಿನ
ಕುಟುಂಬದವರಿಗೆ ಈ ವಿಷಯಗಳೆಲ್ಲ ತಿಳಿದವು. ಯೇಸುವಿಗೆ
ಹುಚ್ಚು ಹಿಡಿದಿದೆಯೆಂದು ಕೆಲವರು ಹೇಳಿದ್ದರಿಂದ ಆತನ
ಕುಟುಂಬದವರು ಆತನನ್ನು ಕರೆದೊಯ್ಯಲು ಅಲ್ಲಿಗೆ ಬಂದರು.

22ಜೆರುಸಲೇಮಿನ ಧರ್ಮೋಪದೇಶಕರು, ''ಇವನೊಳಗೆ
ದೆವ್ವಗಳ ಒಡೆಯನಾದ ಬೆಲ್ಜೆಬೂಲನು ವಾಸಿಸುತ್ತಿದ್ದಾನೆ. ದೆವ್ವ
ಗಳಿಂದ ಪೀಡಿತರಾಗಿರುವವರನ್ನು ಇವನು ಬಿಡಿಸುವುದು ದೆವ್ವ
ಗಳ ಒಡೆಯನ ಸಹಾಯದಿಂದಲೇ'' ಎಂದು ಹೇಳಿದರು.

23ಆದ್ದರಿಂದ ಯೇಸು ಜನರನ್ನು ಒಟ್ಟಿಗೆ ಕರೆದು, ಅವರಿಗೆ
ಸಾಮ್ಯಗಳ ಮೂಲಕ ಬೋಧಿಸಿ, ''ಸೈತಾನನು ತನ್ನ ದೆವ್ವಗಳನ್ನು
ಜನರಿಂದ ಬಲವಂತವಾಗಿ ಹೊರಡಿಸುವುದಿಲ್ಲ. 24ತನ್ನ ವಿರುದ್ಧ
ವಾಗಿ ತಾನೇ ಹೋರಾಡುವ ರಾಜ್ಯ ಉಳಿಯುವುದಿಲ್ಲ. 25ಭೇದ
ಹುಟ್ಟಿದ ಕುಟುಂಬ ಏಳಿಗೆ ಹೊಂದುವುದಿಲ್ಲ. 26ಸೈತಾನನು ತನ್ನ
ವಿರುದ್ಧವಾಗಿಯೂ ತನ್ನ ಜನರ ವಿರುದ್ಧವಾಗಿಯೂ ತಾನೇ
ಹೋರಾಟ ಮಾಡಿದರೆ ಅವನು ಅಂತ್ಯಗೊಳ್ಳುತ್ತಾನೆ. 27ಒಬ್ಬ
ವ್ಯಕ್ತಿಯು ಬಲಾಢ್ಯನ ಮನೆಗೆ ಪ್ರವೇಶಿಸಿ ಅವನ ವಸ್ತುಗಳನ್ನು
ಕದಿಯಲು ಇಚ್ಛಿಸಿದರೆ, ಮೊದಲು ಅವನು ಬಲಾಢ್ಯನನ್ನು ಕಟ್ಟಿ
ಹಾಕಬೇಕು. ಆಗ ಅವನು ಬಲಾಢ್ಯನ ಮನೆಯಿಂದ ವಸ್ತುಗಳನ್ನು
ಕದಿಯಲು ಸಾಧ್ಯವಾಗುವುದು. 28ನಾನು ನಿಮಗೆ ಸತ್ಯವನ್ನು
ಹೇಳುತ್ತಿದ್ದೇನೆ, ಜನರು ಮಾಡುವ ಎಲ್ಲಾ ಪಾಪಗಳಿಗೂ
ದೇವದೂಷಣೆಗಳಿಗೂ ಕ್ಷಮೆ ದೊರೆಯಲು ಸಾಧ್ಯ. 29ಆದರೆ
ಪವಿತ್ರಾತ್ಮನನ್ನು ದೂಷಿಸುವವನಿಗೆ ಕ್ಷಮೆ ಇಲ್ಲವೇ ಇಲ್ಲ. ಅವರ
ಪಾಪ ಶಾಶ್ವತವಾದದ್ದು'' ಎಂದು ಹೇಳಿದನು.

30'ಇವನಿಗೆ ದೆವ್ವಹಿಡಿದಿದೆ' ಎಂದು ಧರ್ಮೋಪದೇಶಕರು
ಆರೋಪಿಸಿದ್ದರಿಂದ ಯೇಸು ಹೀಗೆ ಹೇಳಬೇಕಾಯಿತು.

### ಯೇಸುವಿನ ಶಿಷ್ಯರೇ ಆತನ ನಿಜ ಕುಟುಂಬದವರು
(ಮತ್ತಾಯ 12:46-50; ಲೂಕ 8:19-21)

31ನಂತರ ಯೇಸುವಿನ ತಾಯಿ ಮತ್ತು ಆತನ ಸಹೋದರರು
ಅಲ್ಲಿಗೆ ಬಂದರು. ಅವರು ಹೊರಗೆ ನಿಂತುಕೊಂಡು ಯೇಸುವಿಗೆ
ಬರಬೇಕೆಂದು ಒಬ್ಬನ ಮೂಲಕ ಹೇಳಿಕಳುಹಿಸಿದರು.
32ಅನೇಕ ಜನರು ಯೇಸುವಿನ ಸುತ್ತಲೂ ಕುಳಿತಿದ್ದರು. ಅವನು
ಯೇಸುವಿಗೆ, ‘‘ನಿನ್ನ ತಾಯಿ ಮತ್ತು ಸಹೋದರರು ನಿನಗಾಗಿ
ಹೊರಗಡೆ ಕಾಯುತ್ತಿದ್ದಾರೆ’’ ಎಂದು ಹೇಳಿದನು. 33ಯೇಸು,
‘‘ನನ್ನ ತಾಯಿ ಯಾರು? ನನ್ನ ಸಹೋದರರು ಯಾರು?’’
ಎಂದು ಕೇಳಿ 34ತನ್ನ ಸುತ್ತಲೂ ಕುಳಿತಿದ್ದ ಜನರ ಕಡೆಗೆ ನೋಡಿ,
‘‘ಈ ಜನರೇ ನನ್ನ ತಾಯಿ ಮತ್ತು ನನ್ನ ಸಹೋದರರು!
35ದೇವರ ಚಿತ್ತಕ್ಕನುಸಾರವಾಗಿ ನಡೆಯುವ ಜನರೇ ನನ್ನ
ಸಹೋದರರು, ಸಹೋದರಿಯರು ಮತ್ತು ತಾಯಿ’’ ಎಂದು
ಹೇಳಿದನು.

### ಬೀಜ ಬಿತ್ತುವ ರೈತನ ಸಾಮ್ಯ
(ಮತ್ತಾಯ 13:1-9; 8:4-8)

4 ಮತ್ತೊಂದು ಸಮಯದಲ್ಲಿ ಯೇಸು ಸರೋವರದ
ತೀರದಲ್ಲಿ ಉಪದೇಶಿಸಲಾರಂಭಿಸಿದನು. ಅನೇಕ, ಅನೇಕ
ಜನರು ಆತನ ಸುತ್ತಲೂ ಸೇರಿದರು. ಯೇಸು ಒಂದು
ದೋಣಿಯೊಳಕ್ಕೆ ಹೋಗಿ ಕುಳಿತು ಸರೋವರದ ದಡದಿಂದ
ಸ್ವಲ್ಪದೂರ ಹೋದನು. ಜನರೆಲ್ಲರೂ ಸರೋವರದ ದಡದ
ಮೇಲಿದ್ದರು. 2ಯೇಸು ದೋಣಿಯಲ್ಲಿ ಕುಳಿತುಕೊಂಡು
ಅವರಿಗೆ ಅನೇಕ ಸಾಮ್ಯಗಳ ಮೂಲಕ ಉಪದೇಶಿಸಿದನು.
ಆತನು ಹೇಳಿದ್ದೇನೆಂದರೆ: 3‘‘ಕೇಳಿರಿ! ಒಬ್ಬ ರೈತನು ಬೀಜ
ಬಿತ್ತಲು ಹೊಲಕ್ಕೆ ಹೋದನು. 4ಬಿತ್ತುವಾಗ ಕೆಲವು ಬೀಜಗಳು
ರಸ್ತೆಯ ಮಗ್ಗುಲಲ್ಲಿ ಬಿದ್ದವು. ಹಕ್ಕಿಗಳು ಬಂದು ಆ ಬೀಜ
ಗಳನ್ನೆಲ್ಲ ತಿಂದುಬಿಟ್ಟವು.
5ಕೆಲವು ಬೀಜಗಳು ಬಂಡೆಯ ನೆಲದ ಮೇಲೆ ಬಿದ್ದವು. ಆ
ನೆಲದಲ್ಲಿ ಸಾಕಷ್ಟು ಮಣ್ಣಿರಲಿಲ್ಲ. ನೆಲವು ಆಳವಾಗಿಲ್ಲದಿದ್ದ
ಕಾರಣ ಬೀಜಗಳು ಬಹಳ ಬೇಗನೆ ಮೊಳೆತವು. 6ಆದರೆ
ಸೂರ್ಯನು ಮೇಲೇರಿದಾಗ, ಆಳವಾದ ಬೇರಿಲ್ಲದ ಕಾರಣ
ಆ ಸಸಿಗಳು ಒಣಗಿ ಹೋದವು. 7ಬೇರೆ ಕೆಲವು ಬೀಜಗಳು
ಮುಳ್ಳು ಗಿಡಗಳಲ್ಲಿ ಬಿದ್ದವು. ಮುಳ್ಳುಗಿಡಗಳು ಬೆಳೆದು, ಒಳ್ಳೆಯ
ಗಿಡಗಳನ್ನು ಬೆಳೆಯದಂತೆ ತಡೆದವು. ಆದ್ದರಿಂದ ಆ ಗಿಡಗಳು
ಫಲ ಕೊಡಲಿಲ್ಲ. 8ಬೇರೆ ಕೆಲವು ಬೀಜಗಳು ಒಳ್ಳೆಯ ನೆಲದಲ್ಲಿ
ಬಿದ್ದವು. ಆ ಬೀಜಗಳು ಮೊಳೆತು, ಬೆಳೆದು, ಫಲಬಿಟ್ಟವು. ಕೆಲವು
ಗಿಡಗಳು ಮೂವತ್ತರಷ್ಟು ಹೆಚ್ಚಾಗಿ ಇನ್ನು ಕೆಲವು ಗಿಡಗಳು
ಅರವತ್ತರಷ್ಟು ಹೆಚ್ಚಾಗಿ ಮತ್ತು ಬೇರೆ ಕೆಲವು ಗಿಡಗಳು
ನೂರರಷ್ಟು ಹೆಚ್ಚಾಗಿ ಫಲಕೊಟ್ಟವು.’’ 9ನಂತರ ಯೇಸು, ‘‘ನನ್ನ
ಮಾತನ್ನು ಕೇಳುವ ಜನರೇ, ಆಲಿಸಿರಿ!’’ ಎಂದು ಹೇಳಿದನು.

### ಯೇಸು ಸಾಮ್ಯಗಳನ್ನು ಬಳಸಲು ಕಾರಣವೇನು?
(ಮತ್ತಾಯ 13:10-17; ಲೂಕ 8:9-10)

10ತರುವಾಯ, ಯೇಸು ಒಬ್ಬನೇ ಇದ್ದಾಗ ಹನ್ನೆರಡು
ಮಂದಿ ಅಪೊಸ್ತಲರು ಮತ್ತು ಯೇಸುವಿನ ಇತರ ಶಿಷ್ಯರು ಆ
ಸಾಮ್ಯಗಳ ಕುರಿತು ಆತನನ್ನು ಕೇಳಿದರು. 11ಯೇಸು, ‘‘ದೇವರ
ರಾಜ್ಯದ ಸತ್ಯದ ಗುಟ್ಟನ್ನು ನೀವು ಮಾತ್ರ ತಿಳಿದುಕೊಳ್ಳತಕ್ಕದ್ದು.
ಆದರೆ ಇತರ ಎಲ್ಲಾ ಜನರಿಗೆ ನಾನು ಸಾಮ್ಯಗಳ ಮೂಲಕವಾಗಿ
ಎಲ್ಲವನ್ನೂ ಹೇಳುತ್ತೇನೆ. 12ಏಕೆಂದರೆ:

> ಅವರು ಕಣ್ಣಾರೆ ನೋಡಿಯೂ ಕಾಣರು. ಕಿವಿ
> ಯಾರೆ ಕೇಳಿಯೂ ಗ್ರಹಿಸರು. ಅವರು ನೋಡಿ
> ಗ್ರಹಿಸಿಕೊಂಡರೆ, ಪರಿವರ್ತನೆಗೊಂಡು ಪಾಪಕ್ಷಮೆ
> ಹೊಂದಿಯಾರು’’’ ಎಂದನು.
>
> *ಯೆಶಾಯ 6:9-10*

### ಬಿತ್ತಲ್ಪಟ್ಟ ಬೀಜದ ಕುರಿತು ಯೇಸು ಕೊಟ್ಟ ವಿವರಣೆ
(ಮತ್ತಾಯ 13:18-23; ಲೂಕ 8:11-15)

13ನಂತರ ಯೇಸು ತನ್ನ ಶಿಷ್ಯರಿಗೆ, ‘‘ನಿಮಗೆ ಈ ಸಾಮ್ಯ
ಅರ್ಥವಾಯಿತೇ? ನೀವು ಇದನ್ನೇ ಅರ್ಥ ಮಾಡಿಕೊಳ್ಳದಿದ್ದರೆ
ಬೇರೆ ಯಾವ ಸಾಮ್ಯವನ್ನು ಅರ್ಥಮಾಡಿಕೊಳ್ಳುವಿರಿ?
14ರೈತನು ದೇವರ ವಾಕ್ಯವನ್ನು ಬಿತ್ತುವವನಿಗೆ ಹೋಲಿಕೆ
ಯಾಗಿದ್ದಾನೆ. 15ಕೆಲವು ಜನರು ದೇವರ ವಾಕ್ಯವನ್ನು ಕೇಳು
ತ್ತಾರೆ. ಆದರೆ ಅವರಲ್ಲಿ ಬಿತ್ತಿದ ವಾಕ್ಯವನ್ನು ಸೈತಾನನು ಬಂದು
ತೆಗೆದುಬಿಡುತ್ತಾನೆ. ಈ ಜನರೇ ದಾರಿಯ ಮಗ್ಗುಲಾಗಿದ್ದಾರೆ.
16ಇನ್ನು ಕೆಲವರು ದೇವರ ವಾಕ್ಯವನ್ನು ಕೇಳುತ್ತಾರೆ ಮತ್ತು
ಸಂತೋಷದಿಂದ ಅದನ್ನು ಬೇಗನೆ ಸ್ವೀಕರಿಸಿಕೊಳ್ಳುತ್ತಾರೆ.
17ಆದರೆ ಆ ವಾಕ್ಯವು ತಮ್ಮಲ್ಲಿ ಆಳವಾಗಿ ಬೇರೂರಲು ಅವರು
ಅವಕಾಶ ನೀಡುವುದಿಲ್ಲ. ಅವರು ಆ ವಾಕ್ಯವನ್ನು ಸ್ವಲ್ಪಕಾಲ
ಮಾತ್ರ ಸ್ವೀಕರಿಸಿಕೊಂಡಿರುತ್ತಾರೆ. ಆ ವಾಕ್ಯದ ದೆಸೆಯಿಂದ
ತೊಂದರೆಯಾಗಲಿ ಹಿಂಸೆಯಾಗಲಿ ಬಂದಾಗ ಅವರು ಅದನ್ನು
ಬಹುಬೇಗನೆ ತ್ಯಜಿಸುತ್ತಾರೆ. ಇವರೇ ಬೀಜಬಿದ್ದ ಬಂಡೆಯ
ನೆಲವಾಗಿದ್ದಾರೆ. 18ಇನ್ನು ಕೆಲವರು ಮುಳ್ಳಿನ ಗಿಡಗಳ ನೆಲ
ದಂತಿರುವರು. ಈ ಜನರು ವಾಕ್ಯವನ್ನು ಕೇಳುತ್ತಾರೆ. 19ಆದರೆ
ಈ ಜೀವಿತದ ಚಿಂತೆಗಳು, ಹಣದ ಮೇಲಿನ ವ್ಯಾಮೋಹ ಮತ್ತು
ಇತರ ಎಲ್ಲಾ ವಿಧವಾದ ಆಸೆಗಳು ಅವರಲ್ಲಿ ಬಿದ್ದ ವಾಕ್ಯಕ್ಕೆ
ಬೆಳೆಯಲು ಅವಕಾಶ ಕೊಡುವುದಿಲ್ಲ. ಆದ್ದರಿಂದ ಅವರ
ಜೀವಿತದಲ್ಲಿ ವಾಕ್ಯವು ಫಲ ಫಲಿಸುವುದಿಲ್ಲ. 20 ಇನ್ನು ಕೆಲವರು
ಬೀಜಬಿದ್ದ ಒಳ್ಳೆಯ ನೆಲದಂತಿದ್ದಾರೆ. ಅವರು ವಾಕ್ಯವನ್ನು
ಸ್ವೀಕರಿಸಿಕೊಂಡು ಫಲವನ್ನು ಫಲಿಸುತ್ತಾರೆ. ಕೆಲವು ಸಂದರ್ಭ
ಗಳಲ್ಲಿ ಮೂವತ್ತರಷ್ಟು ಹೆಚ್ಚಾಗಿ, ಇನ್ನು ಕೆಲವು ಸಂದರ್ಭಗಳಲ್ಲಿ
ಅರವತ್ತರಷ್ಟು ಹೆಚ್ಚಾಗಿ, ಮತ್ತೆ ಕೆಲವು ಸಂದರ್ಭಗಳಲ್ಲಿ
ನೂರರಷ್ಟು ಹೆಚ್ಚಾಗಿ ಫಲ ಫಲಿಸುತ್ತಾರೆ’’ ಎಂದು ಹೇಳಿದನು.

### ಉರಿಯುವ ದೀಪದಂತಿರಿ
(ಲೂಕ 8:16-18)

21ನಂತರ ಯೇಸು ಅವರಿಗೆ, ‘‘ನೀವು ಉರಿಯುತ್ತಿರುವ
ದೀಪವನ್ನು ಪಾತ್ರೆಯ ಒಳಗಾಗಲಿ ಮಂಚದ ಕೆಳಗಾಗಲಿ
ಇಡುತ್ತೀರಾ? ಇಲ್ಲ! ನೀವು ದೀಪವನ್ನು ದೀಪಸ್ತಂಭದ ಮೇಲೆ
ಇಡುವಿರಿ. 22ಆಗ ಪ್ರತಿಯೊಂದೂ ಸ್ಪಷ್ಟವಾಗಿ ಗೋಚರ
ವಾಗುವುದು. ರಹಸ್ಯವಾದ ಪ್ರತಿಯೊಂದೂ ಬಟ್ಟಬಯಲಾಗು
ವುದು. 23ನನ್ನ ಮಾತನ್ನು ಕೇಳುತ್ತಿರುವ ಜನರೇ, ಆಲಿಸಿರಿ!.
24‘‘ನೀವು ಕೇಳುತ್ತಿರುವ ಪ್ರತಿಯೊಂದು ವಿಷಯವನ್ನು
ಎಚ್ಚರಿಕೆಯಿಂದ ಆಲೋಚಿಸಿರಿ. ನೀವು ಅಳೆಯುವ ಅಳತೆ
ಯಿಂದಲೇ ನಿಮಗೂ ಅಳೆಯುವರು; ನೀವು ಕೊಟ್ಟದ್ದಕ್ಕಿಂತ

ಹೆಚ್ಚಾಗಿ ಕೊಡುವರು. 25ಯಾವನಲ್ಲಿ ಹೆಚ್ಚಾಗಿರುತ್ತದೆಯೊ
ಅವನಿಗೆ ಇನ್ನೂ ಕೊಡಲಾಗುವುದು. ಯಾವನಲ್ಲಿ ಇರುವು
ದಿಲ್ಲವೊ ಅವನಿಂದ ಇದ್ದದ್ದನ್ನೂ ತೆಗೆದುಕೊಳ್ಳಲಾಗುವುದು''
ಎಂದು ಹೇಳಿದನು.

### ಬಿತ್ತಲ್ಪಟ್ಟ ಬೀಜದ ಕುರಿತು ಯೇಸು ಹೇಳಿದ ಸಾಮ್ಯ

26ನಂತರ ಯೇಸು, ''ದೇವರ ರಾಜ್ಯವು ಭೂಮಿಯಲ್ಲಿ
ಬೀಜ ಬಿತ್ತಿದ ಮನುಷ್ಯನಂತಿದೆ. 27ಬೀಜವು ಹಗಲಿರುಳು
ಬೆಳೆಯುತ್ತದೆ. ರೈತನು ಮಲಗಿರುವಾಗಲೂ ಎಚ್ಚರದಿಂದಿರು
ವಾಗಲೂ ಬೀಜ ಬೆಳೆಯುತ್ತಲೇ ಇರುವುದು. ಬೀಜ ಹೇಗೆ
ಬೆಳೆಯುತ್ತದೆಂಬುದು ರೈತನಿಗೆ ತಿಳಿಯುವುದಿಲ್ಲ.
28ಭೂಮಿಯು ಮೊದಲು ಸಸಿಯನ್ನೂ ಅನಂತರ ಹೊಡೆ
ಯನ್ನೂ ತರುವಾಯ ತೆನೆತುಂಬ ಕಾಳನ್ನೂ ತನ್ನಷ್ಟಕ್ಕೆ ತಾನೇ
ಉತ್ಪತ್ತಿಮಾಡುತ್ತದೆ.
29ತೆನೆಯು ಬಲಿತಾಗ ಗಿಡವನ್ನು ಕೊಯ್ಯುವನು. ಇದನ್ನೇ
ಸುಗ್ಗಿ ಕಾಲ ಎನ್ನುವರು'' ಎಂದು ಹೇಳಿದನು.

### ದೇವರ ರಾಜ್ಯವು ಸಾಸಿವೆ ಕಾಳಿನಂತಿದೆ

(ಮತ್ತಾಯ 13:31-3.2 34-35; ಲೂಕ 13:18-19)

30ನಂತರ ಯೇಸು, ''ದೇವರ ರಾಜ್ಯದ ಬಗ್ಗೆ ವಿವರಿಸಲು
ನಾನು ನಿಮಗೆ ಯಾವ ಸಾಮ್ಯವನ್ನು ಹೇಳಲಿ? 31ದೇವರ
ರಾಜ್ಯವು ಸಾಸಿವೆ ಕಾಳಿನಂತಿರುತ್ತದೆ. ನೀವು ಭೂಮಿಯಲ್ಲಿ
ಬಿತ್ತುವ ಕಾಳುಗಳಲ್ಲಿ ಸಾಸಿವೆ ಕಾಳು ಅತ್ಯಂತ ಸಣ್ಣದಾಗಿದೆ.
32ಆದರೆ ನೀವು ಈ ಕಾಳನ್ನು ಬಿತ್ತಿದಾಗ, ಅದು ಬೆಳೆದು, ನಿಮ್ಮ
ತೋಟದ ಇತರ ಗಿಡಗಳಿಗಿಂತ ಅತಿ ದೊಡ್ಡದಾಗುತ್ತದೆ. ಅದಕ್ಕೆ
ದೊಡ್ಡ ದೊಡ್ಡ ರೆಂಬೆಗಳಿರುತ್ತವೆ. ಕಾಡಿನ ಹಕ್ಕಿಗಳು ಬಂದು,
ಅಲ್ಲಿ ಗೂಡುಗಳನ್ನು ಕಟ್ಟಿಕೊಂಡು ಸೂರ್ಯನ ತಾಪದಿಂದ
ತಪ್ಪಿಸಿಕೊಳ್ಳುತ್ತವೆ'' ಎಂದು ಹೇಳಿದನು. 33ಯೇಸು ಇಂಥ
ಅನೇಕ ಸಾಮ್ಯಗಳ ಮೂಲಕ ಜನರಿಗೆ ಅರ್ಥವಾಗುವಂತೆ
ಉಪದೇಶಿಸಿದನು. 34ಯೇಸುವು ಜನರಿಗೆ ಯಾವಾಗಲೂ
ಸಾಮ್ಯಗಳ ಮೂಲಕ ಉಪದೇಶಿಸಿದನು. ಆದರೆ ತನ್ನ ಶಿಷ್ಯರು
ಮಾತ್ರ ಇರುವಾಗ ಎಲ್ಲವನ್ನೂ ಅವರಿಗೆ ವಿವರಿಸಿ ತಿಳಿಸುತ್ತಿದ್ದನು.

### ಯೇಸುವಿನ ಆಜ್ಞೆಗೆ ಬಿರುಗಾಳಿಯ ವಿಧೇಯತೆ

(ಮತ್ತಾಯ 8:23-27; ಲೂಕ 8:22-25)

35ಆ ದಿನ ಸಂಜೆ, ಯೇಸು ತನ್ನ ಶಿಷ್ಯರಿಗೆ ''ನನ್ನೊಂದಿಗೆ
ಬನ್ನಿ, ಸರೋವರದ ಆಚೆದಡಕ್ಕೆ ಹೋಗೋಣ'' ಎಂದು
ಹೇಳಿದನು. 36ಯೇಸು ಮತ್ತು ಆತನ ಶಿಷ್ಯರು ಅಲ್ಲಿದ್ದ ಜನರನ್ನು
ಅಲ್ಲಿಯೇ ಬಿಟ್ಟು ಹೋದರು. ಯೇಸು ಕುಳಿತುಕೊಂಡು
ಉಪದೇಶಿಸುತ್ತಿದ್ದ ದೋಣಿಯಲ್ಲಿಯೇ ಅವರು ಹೋದರು.
ಅವರೊಂದಿಗೆ ಬೇರೆ ದೋಣಿಗಳೂ ಇದ್ದವು. 37ಅವರು
ಹೋಗುತ್ತಿರಲು ಸರೋವರದ ಮೇಲೆ ಬಿರುಗಾಳಿ ಬೀಸಿತು.
ಎತ್ತರವಾದ ಅಲೆಗಳು ದೋಣಿಗೆ ಅಪ್ಪಳಿಸತೊಡಗಿದ್ದರಿಂದ
ದೋಣಿಯು ನೀರಿನಿಂದ ತುಂಬಿಹೋಯಿತು. 38ಯೇಸುವು
ದೋಣಿಯ ಹಿಂಭಾಗದಲ್ಲಿ ತಲೆದಿಂಬಿನ ಮೇಲೆ ತಲೆಯನ್ನಿಟ್ಟು
ನಿದ್ರಿಸುತ್ತಿದ್ದನು. ಶಿಷ್ಯರು ಆತನ ಬಳಿಗೆ ಹೋಗಿ, ಆತನನ್ನು
ಎಬ್ಬಿಸಿ, ''ಗುರುವೇ, ನೀನು ನಮ್ಮ ಬಗ್ಗೆ ಚಿಂತಿಸುವುದಿಲ್ಲವೆ?
ನಾವು ಮುಳುಗಿ ಹೋಗುತ್ತಿದ್ದೇವೆ!'' ಎಂದರು.
39ಯೇಸು ಎಚ್ಚೆತ್ತು ಬಿರುಗಾಳಿ ಮತ್ತು ಅಲೆಗಳಿಗೆ,
''ಪ್ರಶಾಂತವಾಗಿರಿ! ಮೊರೆಯದಿರಿ!'' ಎಂದು ಆಜ್ಞಾಪಿಸಿದನು.
ಆಗ ಬಿರುಗಾಳಿ ನಿಂತುಹೋಯಿತು ಮತ್ತು ಸರೋವರವು
ಪ್ರಶಾಂತವಾಯಿತು.
40ಯೇಸು ತನ್ನ ಶಿಷ್ಯರಿಗೆ, ''ನೀವೇಕೆ ಹೆದರುತ್ತೀರಿ?
ನಿಮ್ಮಲ್ಲಿ ಇನ್ನೂ ನಂಬಿಕೆಯಿಲ್ಲವೇ? ಎಂದು ಕೇಳಿದನು.
41ಶಿಷ್ಯರು ಬಹಳ ಭಯಪಟ್ಟು ''ಈತನು ಯಾರಿರ
ಬಹುದು? ಗಾಳಿ ಮತ್ತು ನೀರು ಸಹ ಈತನ ಮಾತನ್ನು ಕೇಳು
ತ್ತವೆಯಲ್ಲಾ?'' ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡರು.

### ದೆವ್ವದಿಂದ ಪೀಡಿತನಾಗಿದ್ದವನಿಗೆ ಬಿಡುಗಡೆ

(ಮತ್ತಾಯ 8:28-34; ಲೂಕ 8:26-39)

5 ಯೇಸು ಮತ್ತು ಆತನ ಶಿಷ್ಯರು ಸರೋವರವನ್ನು ದಾಟಿ
ಗೆರಸೇನರ ಪ್ರಾಂತ್ಯಕ್ಕೆ ಹೋದರು. 2ಯೇಸು ದೋಣಿ
ಯಿಂದ ಹೊರಕ್ಕೆ ಬಂದಾಗ, ಒಬ್ಬ ಮನುಷ್ಯನು ಸಮಾಧಿಯ
ಗವಿಗಳಿಂದ ಆತನ ಬಳಿಗೆ ಬಂದನು. ಅವನಿಗೆ ದೆವ್ವಹಿಡಿದಿತ್ತು.
3ಅವನು ಸಮಾಧಿಯ ಗವಿಗಳಲ್ಲಿ ವಾಸಿಸುತ್ತಿದ್ದನು. ಅವನನ್ನು
ಕಟ್ಟಿಹಾಕಲು ಯಾರಿಗೂ ಸಾಧ್ಯವಿರಲಿಲ್ಲ. ಅವನನ್ನು ಸರಪಣಿಗ
ಳಿಂದ ಕಟ್ಟಿದರೂ ಪ್ರಯೋಜನವಾಗುತ್ತಿರಲಿಲ್ಲ. 4ಜನರು
ಅನೇಕ ಸಾರಿ ಅವನ ಕೈ ಕಾಲುಗಳನ್ನು ಸರಪಣಿಗಳಿಂದ
ಕಟ್ಟಿಹಾಕಿದರು. ಆದರೆ ಅವನು ಅವುಗಳನ್ನೆಲ್ಲ ಕಿತ್ತೊಗೆದು
ಬಿಟ್ಟನು. ಅವನನ್ನು ಹತೋಟಿಗೆ ತರುವ ಬಲಿಷ್ಠನು ಅಲ್ಲಿ
ಯಾರೂ ಇರಲಿಲ್ಲ.
5ಅವನು ಹಗಲಿರುಳು, ಸಮಾಧಿಯ ಗವಿಗಳ ಸುತ್ತಲು
ಮತ್ತು ಬೆಟ್ಟಗಳ ಮೇಲೆ ನಡೆದಾಡುತ್ತಿದ್ದನು. ಅವನು
ಕಿರುಚುತ್ತಾ ತನ್ನನ್ನು ಕಲ್ಲುಗಳಿಂದ ಜಜ್ಜಿಕೊಳ್ಳುತ್ತಿದ್ದನು.
6ಯೇಸು ಬಹಳ ದೂರದಲ್ಲಿದ್ದಾಗಲೇ, ಅವನು ಆತನನ್ನು
ಕಂಡು, ಆತನ ಬಳಿಗೆ ಓಡಿಹೋಗಿ ಆತನ ಮುಂದೆ ಅಡ್ಡಬಿದ್ದು
ನಮಸ್ಕರಿಸಿದನು. 7-8ಯೇಸು ಅವನಿಗೆ, ''ಎಲೈ ದೆವ್ವವೇ,
ಅವನೊಳಗಿಂದ ಹೊರಗೆ ಬಾ'' ಎಂದು ಹೇಳಿದನು. ಆಗ ಅವನು
ಗಟ್ಟಿಯಾದ ಧ್ವನಿಯಿಂದ ಅರಚುತ್ತಾ, ''ಯೇಸುವೇ, ಪರಾತ್ಪರ
ನಾದ ದೇವಕುಮಾರನೇ, ನನ್ನಿಂದ ನಿನಗೆ ಏನಾಗಬೇಕಾಗಿದೆ?
ದೇವರಾಣೆಯಿಟ್ಟು ಬೇಡಿಕೊಳ್ಳುತ್ತೇನೆ, ನನ್ನನ್ನು ಹಿಂಸಿಸ
ಬೇಡ'' ಎಂದು ಕೇಳಿಕೊಂಡನು.
9ಆಗ ಯೇಸು ಅವನಿಗೆ, ''ನಿನ್ನ ಹೆಸರೇನು?'' ಎಂದು
ಕೇಳಿದನು. ಅವನು ''ನನ್ನ ಹೆಸರು ದಂಡು,* ಏಕೆಂದರೆ ನನ್ನಲ್ಲಿ
ಅನೇಕ ದೆವ್ವಗಳಿವೆ'' ಎಂದು ಉತ್ತರಕೊಟ್ಟನು. 10ಆ
ಮನುಷ್ಯನ ಒಳಗಿದ್ದ ದೆವ್ವಗಳು ಆ ಪ್ರದೇಶದಿಂದ ತಮ್ಮನ್ನು
ಹೊರಕ್ಕೆ ಕಳುಹಿಸದಂತೆ ಯೇಸುವಿನಲ್ಲಿ ಮತ್ತೆ ಮತ್ತೆ
ಬೇಡಿಕೊಂಡವು.
11ಅಲ್ಲಿಗೆ ಹತ್ತಿರವಿದ್ದ ಬೆಟ್ಟದ ಮೇಲೆ ಹಂದಿಗಳ ದೊಡ್ಡ
ಹಿಂಡು ಮೇಯುತ್ತಿತ್ತು. 12ದೆವ್ವಗಳು ಯೇಸುವಿಗೆ, ''ನಮ್ಮನ್ನು
ಹಂದಿಗಳೊಳಗೆ ಕಳುಹಿಸಿ ಕೊಡು'' ಎಂದು ಬೇಡಿಕೊಂಡವು.
13ಯೇಸು ಅವುಗಳಿಗೆ ಅಪ್ಪಣೆ ಕೊಡಲು ಅವು ಅವನನ್ನು ಬಿಟ್ಟು,
ಹಂದಿಗಳೊಳಗೆ ಹೊಕ್ಕವು. ಆಗ ಹಂದಿಗಳೆಲ್ಲಾ ಬೆಟ್ಟದಿಂದ

---

**ದಂಡು** ಅಂದರೆ 6000 ಸೈನಿಕರುಳ್ಳ ಸೈನ್ಯ ದಳ.

ಇಳಿದು, ಸರೋವರದೊಳಕ್ಕೆ ಬಿದ್ದು ಮುಳುಗಿಹೋದವು. ಆ ಹಿಂಡಿನಲ್ಲಿ ಸುಮಾರು ಎರಡುಸಾವಿರ ಹಂದಿಗಳಿದ್ದವು.

14ಹಂದಿಗಳನ್ನು ಕಾಯುತ್ತಿದ್ದ ಜನರು ಪಟ್ಟಣದೊಳಕ್ಕೆ ಮತ್ತು ತೋಟಗಳಿಗೆ ಓಡಿಹೋಗಿ ಜನರಿಗೆಲ್ಲ ತಿಳಿಸಿದರು. 15ಆಗ ಜನರು ನಡೆದ ಸಂಗತಿಯನ್ನು ನೋಡಲು ಯೇಸುವಿನ ಬಳಿಗೆ ಬಂದರು. ಅನೇಕ ದೆವ್ವಗಳಿಂದ ಪೀಡಿತನಾಗಿದ್ದ ಮನುಷ್ಯನು ಬಟ್ಟೆ ಹಾಕಿಕೊಂಡು ಅಲ್ಲಿ ಕುಳಿತಿರುವುದನ್ನು ಅವರು ಕಂಡರು. ಅವನು ಮತ್ತೆ ಸ್ವಸ್ಥಬುದ್ಧಿಯುಳ್ಳವನಾಗಿದ್ದನು. ಆ ಜನರು ಅವನನ್ನು ನೋಡಿ ಹೆದರಿದರು. 16ಅಲ್ಲಿದ್ದ ಕೆಲವು ಜನರು, ಯೇಸು ಮಾಡಿದ ಈ ಕಾರ್ಯವನ್ನು ನೋಡಿದ್ದರು. ಈ ಜನರೇ ಉಳಿದ ಜನರಿಗೆಲ್ಲರಿಗೂ ನಡೆದ ಸಂಗತಿಯನ್ನು ಅಂದರೆ ದೆವ್ವದಿಂದ ಪೀಡಿತನಾಗಿದ್ದವನಿಗೂ ದೆವ್ವಗಳಿಗೂ ಮತ್ತು ಹಂದಿಗಳಿಗೂ ಸಂಭವಿಸಿದ್ದನ್ನು ತಿಳಿಸಿದರು. 17ಆಗ ಜನರು ತಮ್ಮ ಪ್ರಾಂತ್ಯವನ್ನು ಬಿಟ್ಟುಹೋಗಬೇಕೆಂದು ಯೇಸುವನ್ನು ಬೇಡಿಕೊಂಡರು.

18ಯೇಸು ಅಲ್ಲಿಂದ ಹೋಗಲು ದೋಣಿ ಹತ್ತುವುದಕ್ಕೆ ಸಿದ್ಧನಾದಾಗ ದೆವ್ವಗಳಿಂದ ಬಿಡುಗಡೆ ಹೊಂದಿದ್ದ ಮನುಷ್ಯನು, ''ನಾನೂ ನಿನ್ನ ಜೊತೆಯಲ್ಲಿ ಬರುತ್ತೇನೆ'' ಎಂದು ಬೇಡಿಕೊಂಡನು. 19ಆದರೆ ಯೇಸು ಅವನನ್ನು ಕರೆದುಕೊಂಡು ಹೋಗಲು ಒಪ್ಪದೆ, ''ನಿನ್ನ ಮನೆಗೂ, ನಿನ್ನ ಸ್ನೇಹಿತರ ಬಳಿಗೂ ಹೋಗು. ಪ್ರಭುವು ನಿನಗೆ ಮಾಡಿದ ಒಳ್ಳೆಯದನ್ನೂ ಆತನು ನಿನಗೆ ತೋರಿದ ಕರುಣೆಯನ್ನೂ ಅವರಿಗೆ ತಿಳಿಸು'' ಎಂದು ಹೇಳಿದನು. 20ಆಗ ಅವನು ಅಲ್ಲಿಂದ ಹೊರಟುಹೋದನು ಮತ್ತು ಯೇಸು ತನಗೆ ಮಾಡಿದ ಉಪಕಾರವನ್ನು ಹತ್ತು ಪಟ್ಟಣಗಳ ಪ್ರದೇಶದ ಜನರಿಗೆ ತಿಳಿಸಿದನು. ಆ ಜನರೆಲ್ಲರೂ ಅತ್ಯಾಶ್ಚರ್ಯಪಟ್ಟರು.

### ಸತ್ತು ಹೋಗಿದ್ದ ಹುಡುಗಿಯೊಬ್ಬಳಿಗೆ ಜೀವದಾನ ಕಾಯಿಲೆಯ ಸ್ತ್ರೀಗೆ ಆರೋಗ್ಯದಾನ

(ಮತ್ತಾಯ 9:18-26; ಲೂಕ 8:40-56)

21ಯೇಸು ದೋಣಿಯಲ್ಲಿ ಸರೋವರದ ಆಚೆ ದಡಕ್ಕೆ ಹೋದನು. ಸರೋವರದ ತೀರದಲ್ಲಿ ಅನೇಕ ಜನರು ಆತನ ಸುತ್ತಲೂ ಸೇರಿದರು. 22ಸಭಾಮಂದಿರದ ಅಧಿಕಾರಿಯೊಬ್ಬನು ಆ ಸ್ಥಳಕ್ಕೆ ಬಂದನು. ಅವನ ಹೆಸರು ಯಾಯಿರ. ಅವನು ಯೇಸುವನ್ನು ಕಂಡು, ಆತನ ಮುಂದೆ ಅಡ್ಡಬಿದ್ದು ನಮಸ್ಕರಿಸಿ, 23''ನನ್ನ ಚಿಕ್ಕ ಮಗಳು ಸಾಯುತ್ತಿದ್ದಾಳೆ. ದಯವಿಟ್ಟು ನೀನು ಬಂದು, ನಿನ್ನ ಕೈಗಳಿಂದ ಅವಳನ್ನು ಸ್ಪರ್ಶಿಸು. ಆಗ ಅವಳು ಗುಣವಾಗಿ ಬದುಕಿಕೊಳ್ಳುತ್ತಾಳೆ'' ಎಂದು ಬಹಳವಾಗಿ ಬೇಡಿಕೊಂಡನು. 24ಯೇಸು ಅಧಿಕಾರಿಯೊಂದಿಗೆ ಹೋದನು. ಅನೇಕ ಜನರು ಯೇಸುವನ್ನು ಹಿಂಬಾಲಿಸಿದರು. ಅವರು ಆತನ ಸುತ್ತಲೂ ನೂಕುತ್ತಾ ಹೋದರು.

25ಆ ಜನರ ನಡುವೆ ಒಬ್ಬ ಸ್ತ್ರೀ ಇದ್ದಳು. ಆಕೆಗೆ ಹನ್ನೆರಡು ವರ್ಷಗಳಿಂದ ರಕ್ತಸ್ರಾವವಾಗುತ್ತಿತ್ತು. 26ಆಕೆಯು ಬಹಳ ಸಂಕಟಪಟ್ಟಿದ್ದಳು. ಅವಳಿಗೆ ಸಹಾಯ ಮಾಡಲು ಅನೇಕ ವೈದ್ಯರು ಪ್ರಯತ್ನಿಸಿದ್ದರು. ಅವಳಲ್ಲಿದ್ದ ಹಣವೆಲ್ಲವೂ ವೆಚ್ಚವಾಯಿತು. ಆದರೆ ಅವಳಿಗೆ ವಾಸಿಯಾಗಲಿಲ್ಲ. ಅವಳ ಕಾಯಿಲೆಯು ಇನ್ನೂ ಹೆಚ್ಚಾಗುತ್ತಿತ್ತು. 27ಅವಳಿಗೆ ಯೇಸುವನ್ನು ಕುರಿತು ತಿಳಿದುಬಂತು. ಆದ್ದರಿಂದ ಅವಳು ಜನರ ಗುಂಪಿನಲ್ಲಿ ಹಿಂದಿನಿಂದ ಬಂದು ಆತನ ಮೇಲಂಗಿಯನ್ನು ಮುಟ್ಟಿದಳು. 28ಆ ಸ್ತ್ರೀಯು ''ಆತನ ಉಡುಪನ್ನು ಮುಟ್ಟಿದರೆ ಸಾಕು ನಾನು ಗುಣಮುಖಳಾಗುತ್ತೇನೆ'' ಎಂದುಕೊಂಡದ್ದರಿಂದ 29ಮುಟ್ಟಿದ ಕೂಡಲೆ, ಅವಳ ರಕ್ತಸ್ರಾವ ನಿಂತುಹೋಯಿತು. ತನಗೆ ಗುಣವಾಯಿತೆಂಬುದು ಆಕೆಗೆ ಅರಿವಾಯಿತು. 30ತನ್ನಿಂದ ಶಕ್ತಿಯು ಹೊರಟದ್ದು ಸಹ ಯೇಸುವಿಗೆ ತಿಳಿಯಿತು. ಆತನು ಅಲ್ಲೇ ನಿಂತು ಹಿಂತಿರುಗಿ ನೋಡಿ, ''ನನ್ನ ಉಡುಪನ್ನು ಮುಟ್ಟಿದವರು ಯಾರು?'' ಎಂದು ಕೇಳಿದನು.

31ಶಿಷ್ಯರು ಯೇಸುವಿಗೆ, ''ಅನೇಕ ಜನರು ನಿನ್ನ ಮೇಲೆ ಬೀಳುತ್ತಿದ್ದಾರೆ. ಹೀಗಿರಲು 'ನನ್ನನ್ನು ಸ್ಪರ್ಶಿಸಿದವರು ಯಾರು?' ಎಂದು ಕೇಳುತ್ತಿರುವೆಯಲ್ಲಾ'' ಎಂದರು.

32ಆದರೆ ಯೇಸು ತನ್ನನ್ನು ಸ್ಪರ್ಶಿಸಿದವರು ಯಾರೆಂದು ಇನ್ನೂ ನೋಡುತ್ತಲೇ ಇದ್ದನು. 33ತನಗೆ ಗುಣವಾಯಿತೆಂಬುದು ಆ ಸ್ತ್ರೀಗೆ ತಿಳಿದಿತ್ತು. ಆದ್ದರಿಂದ ಆಕೆ ಬಂದು, ಯೇಸುವಿನ ಪಾದಗಳ ಮುಂದೆ ಅಡ್ಡಬಿದ್ದು ನಡೆದ ಸಂಗತಿಯನ್ನೆಲ್ಲಾ ಹೇಳಿದಳು. 34ಯೇಸು ಆಕೆಗೆ, ''ಮಗಳೇ, ನಿನ್ನ ನಂಬಿಕೆಯಿಂದಲೇ ನಿನಗೆ ವಾಸಿಯಾಯಿತು. ಸಮಾಧಾನದಿಂದ ಹೋಗು. ನಿನಗೆ ಇನ್ನು ಮೇಲೆ ಆ ಕಾಯಿಲೆಯ ಬಾಧೆ ಇರುವುದಿಲ್ಲ'' ಎಂದು ಹೇಳಿದನು.

35ಯೇಸು ಅಲ್ಲಿ ಇನ್ನೂ ಮಾತನಾಡುತ್ತಿದ್ದನು. ಅಷ್ಟರಲ್ಲಿ ಕೆಲವು ಜನರು ಸಭಾಮಂದಿರದ ಅಧಿಕಾರಿಯಾದ ಯಾಯಿರನ ಮನೆಯಿಂದ ಬಂದು ಯಾಯಿರನಿಗೆ, ''ನಿನ್ನ ಮಗಳು ಸತ್ತುಹೋದಳು. ಈಗ ಬೋಧಕನಿಗೆ ತೊಂದರೆಕೊಡುವ ಅಗತ್ಯವಿಲ್ಲ'' ಎಂದು ಹೇಳಿದರು.

36ಆದರೆ ಯೇಸು ಅವರ ಮಾತನ್ನು ಗಣನೆಗೆ ತಂದುಕೊಳ್ಳದೆ, ಸಭಾಮಂದಿರದ ಅಧಿಕಾರಿಗೆ, ''ಹೆದರಬೇಡ, ನಂಬಿಕೆ ಮಾತ್ರ ಇರಲಿ'' ಎಂದು ಹೇಳಿದನು.

37ಯೇಸು ಪೇತ್ರನನ್ನು, ಯಾಕೋಬನನ್ನು ಮತ್ತು ಯಾಕೋಬನ ತಮ್ಮನಾದ ಯೋಹಾನನನ್ನು ಮಾತ್ರ ತನ್ನ ಜೊತೆಯಲ್ಲಿ ಕರೆದೊಯ್ದನು. 38ಯೇಸು ಮತ್ತು ಈ ಶಿಷ್ಯರು ಸಭಾಮಂದಿರದ ಅಧಿಕಾರಿಯಾದ ಯಾಯಿರನ ಮನೆಗೆ ಹೋದರು. ಅಲ್ಲಿ ಅನೇಕ ಜನರು ಜೋರಾಗಿ ಅಳುತ್ತಿರುವುದನ್ನು ಯೇಸು ನೋಡಿದನು. ಅಲ್ಲಿ ಬಹಳ ಗದ್ದಲವಿತ್ತು. 39ಯೇಸು ಮನೆಯನ್ನು ಪ್ರವೇಶಿಸಿ, ಆ ಜನರಿಗೆ, ''ನೀವು ಅಳುತ್ತಿರುವುದೇಕೆ? ಇಷ್ಟೊಂದು ಗದ್ದಲ ಮಾಡುತ್ತಿರುವುದೇಕೆ? ಈ ಹುಡುಗಿ ಸತ್ತಿಲ್ಲ, ನಿದ್ರಿಸುತ್ತಿದ್ದಾಳೆ'' ಎಂದು ಹೇಳಿದನು. 40ಆದರೆ ಆ ಜನರೆಲ್ಲರೂ ಯೇಸುವನ್ನು ಗೇಲಿ ಮಾಡಿದರು. ಯೇಸು ಆ ಜನರೆಲ್ಲರನ್ನು ಹೊರಗೆ ಕಳುಹಿಸಿ, ಆ ಬಾಲಕಿಯ ತಂದೆತಾಯಿಗಳನ್ನು ಮತ್ತು ತನ್ನ ಮೂವರು ಶಿಷ್ಯರನ್ನು ಮಾತ್ರ ತನ್ನೊಂದಿಗೆ ಕರೆದುಕೊಂಡು ಆ ಬಾಲಕಿಯ ಕೊಠಡಿಯೊಳಕ್ಕೆ ಹೋದನು. 41ಯೇಸು ಆ ಬಾಲಕಿಯ ಕೈ ಹಿಡಿದು, ಅವಳಿಗೆ, ''ತಲಿಥಾ ಕೂಮ್'' ಎಂದು ಹೇಳಿದನು. (ಅಂದರೆ ''ಚಿಕ್ಕ ಹುಡುಗಿಯೇ, ಎದ್ದೇಳು ಎಂದು ನಾನು ಹೇಳುತ್ತಿದ್ದೇನೆ,'' ಎಂದರ್ಥ.) 42 ಕೂಡಲೇ ಆ ಬಾಲಕಿ ಎದ್ದು ನಿಂತು ನಡೆದಾಡಲಾರಂಭಿಸಿದಳು. ಆ ಬಾಲಕಿಗೆ ಹನ್ನೆರಡು ವರ್ಷ ವಯಸ್ಸಾಗಿತ್ತು. ಅವಳ ತಂದೆತಾಯಿಗಳು ಮತ್ತು ಶಿಷ್ಯರು

ಅತ್ಯಾಶ್ಚರ್ಯಗೊಂಡರು. 43ಈ ವಿಷಯವನ್ನು ಯಾರಿಗೂ
ಹೇಳಕೂಡದೆಂದು ಯೇಸು ಆಕೆಯ ತಂದೆತಾಯಿಗಳಿಗೆ ಖಂಡಿತ
ವಾಗಿ ಹೇಳಿ ಆ ಬಾಲಕಿಗೆ ಊಟಮಾಡಿಸಿರಿ ಎಂದನು.

## ಸ್ವಂತ ಊರಿಗೆ ಯೇಸುವಿನ ಪ್ರಯಾಣ

(ಮತ್ತಾಯ 13:53-58; ಲೂಕ 4:16-30)

6 ಯೇಸು ಅಲ್ಲಿಂದ ಹೊರಟು, ತನ್ನ ಸ್ವಂತ ಊರಿಗೆ
ಹೋದನು. ಆತನ ಶಿಷ್ಯರು ಆತನೊಂದಿಗೆ ಹೋದರು.
2ಸಬ್ಬತ್ ದಿನದಂದು ಯೇಸು ಸಭಾಮಂದಿರದಲ್ಲಿ ಉಪದೇಶಿ
ಸಿದನು. ಆತನ ಉಪದೇಶವನ್ನು ಕೇಳಿ ಆಶ್ಚರ್ಯಗೊಂಡ ಅನೇಕ
ಜನರು ‘‘ಈ ಉಪದೇಶವನ್ನು ಮತ್ತು ಈ ಜ್ಞಾನವನ್ನು ಇವನು
ಎಲ್ಲಿಂದ ಪಡೆದನು? ಇವನಿಗೆ ಕೊಟ್ಟವರು ಯಾರು? ಇವನಿಗೆ
ಅದ್ಭುತ ಕಾರ್ಯಗಳನ್ನು ಮಾಡುವ ಶಕ್ತಿಯು ಎಲ್ಲಿಂದ ಬಂತು?
3ಇವನು ಕೇವಲ ಬಡಗಿ. ಇವನ ತಾಯಿ ಮರಿಯಳು. ಇವನು
ಯಾಕೋಬ, ಯೋಸೆ, ಯೂದ ಮತ್ತು ಸಿಮೋನರ ಅಣ್ಣ.
ಇವನ ತಂಗಿಯರು ಇಲ್ಲಿ ನಮ್ಮೊಂದಿಗಿದ್ದಾರೆ’’ ಎಂದು ಹೇಳಿ
ಆತನನ್ನು ತಾತ್ಸಾರ ಮಾಡಿದರು.

4ಯೇಸು, ‘‘ಪ್ರವಾದಿಯನ್ನು ಬೇರೆ ಜನರು ಗೌರವಿಸು
ತ್ತಾರೆ, ಆದರೆ ಪ್ರವಾದಿಗೆ ಸ್ವಂತ ಊರಿನಲ್ಲಿಯೂ ಸ್ವಂತ
ಜನರಲ್ಲಿಯೂ ಸ್ವಂತ ಮನೆಯಲ್ಲಿಯೂ ಗೌರವ ದೊರೆಯುವು
ದಿಲ್ಲ’’ ಎಂದು ಜನರಿಗೆ ಹೇಳಿದನು. 5ಯೇಸು ಆ ಊರಿನಲ್ಲಿ
ಅನೇಕ ಅದ್ಭುತಕಾರ್ಯಗಳನ್ನು ಮಾಡಲು ಸಾಧ್ಯವಾಗಲಿಲ್ಲ.
ಆತನು ತನ್ನ ಕೈಗಳನ್ನು ಕೆಲವು ಮಂದಿ ಕಾಯಿಲೆಯವರ
ಮೇಲಿಟ್ಟು ಅವರ ಕಾಯಿಲೆಗಳನ್ನು ವಾಸಿಮಾಡಿದನು.
ಇವುಗಳಲ್ಲದೆ ಬೇರೆ ಯಾವ ಅದ್ಭುತಕಾರ್ಯಗಳನ್ನೂ ಆತನು
ಮಾಡಲಿಲ್ಲ. 6ಆ ಜನರಲ್ಲಿ ನಂಬಿಕೆಯಿಲ್ಲದಿರುವುದನ್ನು ಕಂಡು
ಯೇಸುವಿಗೆ ಬಹಳ ಆಶ್ಚರ್ಯವಾಯಿತು.

ಬಳಿಕ ಯೇಸು ಆ ಪ್ರದೇಶದ ಇತರ ಹಳ್ಳಿಗಳಿಗೆ ಹೋಗಿ
ಉಪದೇಶಿಸಿದನು. 7ಯೇಸು ಹನ್ನೆರಡು ಮಂದಿ ಶಿಷ್ಯರನ್ನು
ಒಟ್ಟಾಗಿ ಕರೆದು ಅವರನ್ನು ಇಬ್ಬರಿಬ್ಬರಾಗಿ ಹೊರಗೆ ಕಳುಹಿ
ಸಿದನು. ಯೇಸು ಅವರಿಗೆ ದೆವ್ವಗಳ ಮೇಲೆ ಅಧಿಕಾರವನ್ನು
ನೀಡಿದನು. 8ಯೇಸು ಅವರಿಗೆ ಹೇಳಿದ್ದೇನೆಂದರೆ: ‘‘ನಿಮ್ಮ
ಪ್ರವಾಸಕ್ಕೆ ಏನನ್ನೂ ತೆಗೆದುಕೊಳ್ಳಬೇಡಿ. ಊರುಗೋಲನ್ನು
ಮಾತ್ರ ತೆಗೆದುಕೊಳ್ಳಿ. ರೊಟ್ಟಿಯನ್ನಾಗಲಿ, ಚೀಲವನ್ನಾಗಲಿ
ತೆಗೆದುಕೊಳ್ಳಬೇಡಿ. ನಿಮ್ಮ ಜೇಬಿನಲ್ಲಿ ಹಣವನ್ನು ಇಟ್ಟುಕೊಳ್ಳ
ಬೇಡಿ. 9ಪಾದರಕ್ಷೆಗಳನ್ನು ತೊಟ್ಟುಕೊಳ್ಳಿರಿ. ನೀವು ಧರಿಸಿ
ಕೊಂಡಿರುವ ಉಡುಪೇ ಸಾಕು.

10ನೀವು ಒಂದು ಮನೆಯಲ್ಲಿ ಇಳಿದುಕೊಂಡ ಮೇಲೆ ಆ
ಊರನ್ನು ಬಿಡುವವರೆಗೆ ಅದೇ ಮನೆಯಲ್ಲಿರಿ. 11ಯಾವ
ಊರಿನವರಾದರೂ ನಿಮ್ಮನ್ನು ಸ್ವೀಕರಿಸಿಕೊಳ್ಳದಿದ್ದರೆ ಮತ್ತು
ನಿಮ್ಮ ಬೋಧನೆಯನ್ನು ಕೇಳದಿದ್ದರೆ ನಿಮ್ಮ ಪಾದಕ್ಕೆ ಹತ್ತಿದ
ಧೂಳನ್ನು ಝಾಡಿಸಿ ಆ ಊರನ್ನು ಬಿಟ್ಟುಹೋಗಿರಿ. ಇದು
ಅವರಿಗೆ ಎಚ್ಚರಿಕೆಯಾಗಿರುತ್ತದೆ.’’

12ಶಿಷ್ಯರು ಅಲ್ಲಿಂದ ಹೊರಟು, ಇತರ ಸ್ಥಳಗಳಿಗೆ ಹೋಗಿ
ಜನರಿಗೆ, ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ
ತಿರುಗಿಕೊಳ್ಳಿರಿ ಎಂದು ಉಪದೇಶಿಸಿದರು. 13ದೆವ್ವಗಳಿಂದ
ಪೀಡಿತರಾಗಿದ್ದ ಅನೇಕರನ್ನು ಶಿಷ್ಯರು ಬಿಡುಗಡೆ ಮಾಡಿದರು
ಮತ್ತು ಕಾಯಿಲೆಯ ಜನರಿಗೆ ಎಣ್ಣೆಯನ್ನು ಹಚ್ಚಿ ಗುಣ
ಪಡಿಸಿದರು. 14ಯೇಸು ಪ್ರಸಿದ್ಧನಾಗಿದ್ದುದರಿಂದ ರಾಜನಾದ
ಹೆರೋದನಿಗೆ ಯೇಸುವಿನ ವಿಷಯ ತಿಳಿಯಿತು. ಕೆಲವು ಜನರು,
‘‘ಇವನು (ಯೇಸು) ಸ್ನಾನಿಕ ಯೋಹಾನ. ಇವನು ಮತ್ತೆ ಬದುಕಿ
ಬಂದಿದ್ದಾನೆ. ಆದಕಾರಣವೇ ಈ ಅದ್ಭುತಕಾರ್ಯಗಳನ್ನು
ಮಾಡಲು ಶಕ್ತನಾಗಿದ್ದಾನೆ’’ ಎಂದು ಹೇಳಿದರು.

15ಇನ್ನು ಕೆಲವರು, ‘‘ಇವನು ಎಲೀಯ’’ನೆಂದು
ಹೇಳಿದರು.

ಇತರ ಜನರು, ‘‘ಯೇಸು ಒಬ್ಬ ಪ್ರವಾದಿ. ಬಹುಕಾಲದ
ಹಿಂದೆ ಜೀವಿಸಿದ್ದ ಪ್ರವಾದಿಗಳಂತೆ ಇವನೂ ಒಬ್ಬನು’’ ಎಂದು
ಹೇಳಿದರು. 16ಜನರು ಯೇಸುವಿನ ಬಗ್ಗೆ ಹೇಳುತ್ತಿದ್ದ ಈ
ಮಾತುಗಳನ್ನೆಲ್ಲಾ ಕೇಳಿದ ಹೆರೋದನು, ‘‘ನಾನು ಶಿರಚ್ಛೇದನ
ಮಾಡಿಸಿದ ಯೋಹಾನನು ಈಗ ಮತ್ತೆ ಬದುಕಿ ಬಂದಿದ್ದಾನೆ!
ಎಂದು ಹೇಳಿದನು.

## ಸ್ನಾನಿಕ ಯೋಹಾನನು ಕೊಲ್ಲಲ್ಪಟ್ಟ ಬಗ್ಗೆ

17ಯೋಹಾನನನ್ನು ಬಂಧಿಸಲು ತನ್ನ ಸೈನಿಕರಿಗೆ
ಹೆರೋದನೇ ಆಜ್ಞಾಪಿಸಿದ್ದನು. ಅಂತೆಯೇ ಅವರು ಯೋಹಾನ
ನನ್ನು ಸೆರೆಯಲ್ಲಿ ಹಾಕಿದ್ದರು. ಹೆರೋದನು ತನ್ನ ಪತ್ನಿಯಾಗಿ
ಇಟ್ಟುಕೊಂಡಿದ್ದ ಹೆರೋದ್ಯಳ ನಿಮಿತ್ತ ಹೀಗೆ ಮಾಡಿದ್ದನು.
ಹೆರೋದ್ಯಳು ಹೆರೋದನ ಸಹೋದರನಾದ ಫಿಲಿಪ್ಪನ ಪತ್ನಿ.
18ಯೋಹಾನನು ಹೆರೋದನಿಗೆ, ‘‘ನೀನು ನಿನ್ನ ಅಣ್ಣನ
ಪತ್ನಿಯನ್ನು ಇಟ್ಟುಕೊಂಡಿರುವುದು ಸರಿಯಲ್ಲ’’ ಎಂದು
ಹೇಳುತ್ತಿದ್ದನು. 19ಆದ್ದರಿಂದ ಹೆರೋದ್ಯಳು ಯೋಹಾನನನ್ನು
ದ್ವೇಷಿಸಲಾರಂಭಿಸಿ ಅವನನ್ನು ಕೊಲ್ಲಿಸಬೇಕೆಂದಿದ್ದಳು.
20ಆದರೆ ಆಕೆಗೆ ಸಾಧ್ಯವಾಗಲಿಲ್ಲ. ಹೆರೋದನು ಯೋಹಾನ
ನನ್ನು ಕೊಲ್ಲಿಸಲು ಭಯಪಟ್ಟನು. ಯೋಹಾನನನ್ನು ಒಳ್ಳೆಯವ
ನೆಂದೂ ಪವಿತ್ರನೆಂದೂ ಜನರೆಲ್ಲರು ನಂಬಿದ್ದಾರೆಂಬುದು
ಹೆರೋದನಿಗೆ ತಿಳಿದಿತ್ತು. ಆದ್ದರಿಂದ ಹೆರೋದನು ಯೋಹಾನ
ನನ್ನು ರಕ್ಷಿಸಿದನು. ಹೆರೋದನು ಯೋಹಾನನ ಉಪದೇಶ
ವನ್ನು ಕೇಳಿದಾಗಲೆಲ್ಲಾ ಗಲಿಬಿಲಿಗೊಳ್ಳುತ್ತಿದ್ದನು. ಆದರೂ
ಅವನ ಉಪದೇಶವನ್ನು ಸಂತೋಷದಿಂದ ಕೇಳುತ್ತಿದ್ದನು.

21ಒಮ್ಮೆ ಯೋಹಾನನನ್ನು ಮರಣಕ್ಕೆ ಈಡು ಮಾಡುವ
ಸುಸಮಯ ಹೆರೋದ್ಯಳಿಗೆ ದೊರೆಯಿತು. ಅಂದು ಹೆರೋದನ
ಹುಟ್ಟುಹಬ್ಬದ ದಿನವಾಗಿತ್ತು. ಹೆರೋದನು ಪ್ರಮುಖ ರಾಜ್ಯಾಧಿ
ಕಾರಿಗಳಿಗೂ ಸೇನಾಧಿಪತಿಗಳಿಗೂ ಮತ್ತು ಗಲಿಲೀಯದ
ಪ್ರಮುಖರಿಗೂ ಒಂದು ಔತಣಕೂಟವನ್ನು ಏರ್ಪಡಿಸಿದನು.
22ಹೆರೋದ್ಯಳ ಮಗಳು ಈ ಔತಣಕೂಟಕ್ಕೆ ಬಂದು ನರ್ತಿಸಿ
ದಳು. ಹೆರೋದನಿಗೂ ಅವನ ಜೊತೆಯಲ್ಲಿ ಊಟಮಾಡುತ್ತಿದ್ದ
ವರಿಗೂ ಬಹಳ ಸಂತೋಷವಾಯಿತು.

ಆಗ ರಾಜ ಹೆರೋದನು ಆ ಹುಡುಗಿಗೆ, ‘‘ನಿನಗೆ ಏನು
ಬೇಕಾದರೂ ಕೇಳಿಕೋ, ನಾನು ನಿನಗೆ ಕೊಡುತ್ತೇನೆ. 23ನನ್ನ
ರಾಜ್ಯದಲ್ಲಿ ಅರ್ಧವನ್ನು ಕೇಳಿಕೊಂಡರೂ ಕೊಡುತ್ತೇನೆ’’
ಎಂದು ಪ್ರಮಾಣಮಾಡಿದನು.

24ಆ ಹುಡುಗಿಯು ತನ್ನ ತಾಯಿಯ ಬಳಿಗೆ ಹೋಗಿ,
‘‘ನಾನು ಏನನ್ನು ಕೇಳಿಕೊಳ್ಳಲಿ?’’ ಎಂದು ಕೇಳಿದಳು.

ಅವಳ ತಾಯಿ, ‘‘ಸ್ನಾನಿಕ ಯೋಹಾನನ ತಲೆಯನ್ನು
ಕೇಳಿಕೋ’’ ಎಂದು ಹೇಳಿಕೊಟ್ಟಳು.

25ಆ ಹುಡುಗಿ ಬೇಗನೆ ರಾಜನ ಬಳಿಗೆ ಬಂದು, ‘‘ಸ್ನಾನಿಕ
ಯೋಹಾನನ ತಲೆಯನ್ನು ಒಂದು ತಟ್ಟೆಯಲ್ಲಿ ಈಗಲೇ
ತರಿಸಿಕೊಡಿ, ಇದೇ ನನ್ನ ಬೇಡಿಕೆ’’ ಎಂದು ಹೇಳಿದಳು.
26ರಾಜ ಹೆರೋದನು ಬಹಳ ವ್ಯಸನಗೊಂಡನು. ಆದರೆ
ಅವನು ಆ ಹುಡುಗಿಗೆ ಏನು ಬೇಕಾದರೂ ಕೊಡುವೆನೆಂದು
ಪ್ರಮಾಣ ಮಾಡಿದ್ದನು. ಅಲ್ಲಿ ಹೆರೋದನ ಸಂಗಡ ಊಟ
ಮಾಡುತ್ತಿದ್ದ ಜನರು ಆ ಪ್ರಮಾಣವನ್ನು ಕೇಳಿಸಿಕೊಂಡಿದ್ದರು.
ಆದ್ದರಿಂದ ಅವಳು ಕೇಳಿದ್ದನ್ನು ನಿರಾಕರಿಸಲು ಹೆರೋದನು
ಇಚ್ಛಿಸಲಿಲ್ಲ. 27ಆದ್ದರಿಂದ ರಾಜನು ಯೋಹಾನನ ತಲೆಯನ್ನು
ಕತ್ತರಿಸಿ ತರಲು ಒಬ್ಬ ಸೈನಿಕನನ್ನು ಕಳುಹಿಸಿದನು. ಸೈನಿಕನು
ಸೆರೆಮನೆಗೆ ಹೋಗಿ ಯೋಹಾನನ ತಲೆಯನ್ನು ಕತ್ತರಿಸಿ,
28ಅದನ್ನು ಒಂದು ತಟ್ಟೆಯ ಮೇಲಿಟ್ಟು ತಂದು ಆ ಹುಡುಗಿಗೆ
ಕೊಟ್ಟನು. ಅವಳು ಆ ತಲೆಯನ್ನು ತನ್ನ ತಾಯಿಗೆ ಕೊಟ್ಟಳು.
29ನಡೆದ ಈ ಸಂಗತಿಯು ಯೋಹಾನನ ಶಿಷ್ಯರಿಗೆ ತಿಳಿಯಿತು.
ಅವರು ಬಂದು, ಯೋಹಾನನ ದೇಹವನ್ನು ತೆಗೆದುಕೊಂಡು
ಹೋಗಿ ಒಂದು ಸಮಾಧಿಯಲ್ಲಿಟ್ಟರು.

### ಐದು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮತ್ತಾಯ 14:13-21; ಲೂಕ 9:10-17; ಯೋಹಾನ 6:1-14)

30ಯೇಸು ಉಪದೇಶಿಸಲು ಕಳುಹಿಸಿದ್ದ ಅಪೊಸ್ತಲರು
ಮರಳಿ ಬಂದು ತಾವು ಮಾಡಿದ ಮತ್ತು ಉಪದೇಶಿಸಿದ
ಸಂಗತಿಗಳನ್ನೆಲ್ಲ ಆತನಿಗೆ ತಿಳಿಸಿದರು.
31ಯೇಸು ಮತ್ತು ಆತನ ಶಿಷ್ಯರು ಜನನಿಬಿಡವಾದ
ಸ್ಥಳದಲ್ಲಿದ್ದರು. ಅಲ್ಲಿ ಅನೇಕಾನೇಕ ಜನರಿದ್ದರು. ಯೇಸು
ಮತ್ತು ಆತನ ಶಿಷ್ಯರಿಗೆ ಊಟಮಾಡಲು ಸಹ ಸಮಯವಿರಲಿಲ್ಲ.
ಯೇಸು ತನ್ನ ಶಿಷ್ಯರಿಗೆ, ‘‘ನನ್ನೊಂದಿಗೆ ಬನ್ನಿ. ನಾವು ಪ್ರಶಾಂತ
ವಾಗಿರುವ ಸ್ಥಳಕ್ಕೆ ಹೋಗಿ ಸ್ವಲ್ಪ ವಿಶ್ರಮಿಸಿಕೊಳ್ಳೋಣ’’ ಎಂದು
ಹೇಳಿದನು. 32ಅಂತೆಯೇ ಯೇಸು ಮತ್ತು ಆತನ ಶಿಷ್ಯರು
ಜನರಿಲ್ಲದ ಸ್ಥಳಕ್ಕೆ ದೋಣಿಯಲ್ಲಿ ಪ್ರತ್ಯೇಕವಾಗಿ ಹೊರಟರು.
33ಆದರೆ ಅವರು ಹೋಗುತ್ತಿರುವುದನ್ನು ಅನೇಕ ಜನರು
ನೋಡಿದರು. ಆತನು ಯೇಸುವೆಂಬುದು ಅವರಿಗೆ ತಿಳಿದಿತ್ತು.
ಆದ್ದರಿಂದ ಆತನು ಹೋಗುತ್ತಿರುವ ಸ್ಥಳಕ್ಕೆ ಎಲ್ಲಾ ಊರು
ಗಳಿಂದ ಜನರು ಓಡಿಹೋಗಿ, ಆತನು ಅಲ್ಲಿಗೆ ಬರುವುದಕ್ಕೆ
ಮುಂಚೆಯೇ ಅಲ್ಲಿದ್ದರು. 34ಯೇಸು ಅಲ್ಲಿಗೆ ಬಂದಾಗ, ಅನೇಕ
ಜನರು ತನಗಾಗಿ ಕಾಯುತ್ತಿರುವುದನ್ನು ನೋಡಿದನು. ಅವರು
ಕುರುಬನಿಲ್ಲದ ಕುರಿಗಳಂತೆ ಇರುವುದನ್ನು ಕಂಡು ದುಃಖ
ಗೊಂಡು ಅವರಿಗೆ ಅನೇಕ ಸಂಗತಿಗಳನ್ನು ಉಪದೇಶಿಸಿದನು.
35ಅಂದು ಬಹಳ ಹೊತ್ತಾಯಿತು. ಯೇಸುವಿನ ಶಿಷ್ಯರು
ಆತನ ಬಳಿಗೆ ಬಂದು, ‘‘ಈ ಸ್ಥಳದಲ್ಲಿ ಯಾರೂ ವಾಸಿಸುತ್ತಿಲ್ಲ.
ಈಗಾಗಲೇ ಬಹಳ ಹೊತ್ತಾಗಿದೆ. 36ಆದ್ದರಿಂದ ಜನರನ್ನು
ಕಳುಹಿಸಿಬಿಡು. ಅವರು ಸುತ್ತಮುತ್ತಲಿರುವ ತೋಟಗಳಿಗೂ
ಪಟ್ಟಣಗಳಿಗೂ ಹೋಗಿ ಆಹಾರವನ್ನು ಕೊಂಡುಕೊಳ್ಳಲಿ’’
ಎಂದು ಹೇಳಿದರು.
37ಆದರೆ ಯೇಸು, ‘‘ನೀವೇ ಅವರಿಗೆ ಸ್ವಲ್ಪ ಆಹಾರವನ್ನು
ಕೊಡಿ’’ ಎಂದು ಉತ್ತರಕೊಟ್ಟನು. ಶಿಷ್ಯರು ಯೇಸುವಿಗೆ, ‘‘ಈ
ಜನರಿಗೆಲ್ಲ ಬೇಕಾಗುವಷ್ಟು ರೊಟ್ಟಿಯನ್ನು ನಾವು ಎಲ್ಲಿಂದ
ತರೋಣ! ಅವರಿಗೆ ಬೇಕಾಗುವಷ್ಟು ರೊಟ್ಟಿಯನ್ನು ಕೊಂಡು
ಕೊಂಡು ಬರಬೇಕಾದರೆ ನಮಗೆ ಇನ್ನೂರು ದಿನಾರಿ ನಾಣ್ಯ*
ಗಳಾದರೂ ಬೇಕು!’’ ಎಂದು ಹೇಳಿದರು. 38ಯೇಸು ಶಿಷ್ಯರಿಗೆ,
‘‘ಈಗ ನಿಮ್ಮ ಬಳಿಯಲ್ಲಿ ಎಷ್ಟು ರೊಟ್ಟಿಗಳಿವೆ? ಹೋಗಿ
ನೋಡಿ’’ ಎಂದು ಹೇಳಿದನು.
ಶಿಷ್ಯರು ಹೋಗಿ ರೊಟ್ಟಿಗಳನ್ನು ಎಣಿಸಿ ಬಂದು, ‘‘ನಮ್ಮ
ಬಳಿ ಐದು ರೊಟ್ಟಿಗಳಿವೆ ಮತ್ತು ಎರಡು ಮೀನುಗಳಿವೆ’’ ಎಂದು
ಹೇಳಿದರು.
39ಆಗ ಯೇಸು ಶಿಷ್ಯರಿಗೆ, ‘‘ಹಸಿರು ಹುಲ್ಲಿನ ಮೇಲೆ
ಸಾಲುಸಾಲಾಗಿ ಕುಳಿತುಕೊಳ್ಳಲು ಜನರಿಗೆ ತಿಳಿಸಿ’’ ಎಂದು
ಹೇಳಿದನು. 40ಅಂತೆಯೇ ಜನರೆಲ್ಲರೂ ಸಾಲುಸಾಲಾಗಿ ಕುಳಿತು
ಕೊಂಡರು. ಪ್ರತಿಯೊಂದು ಸಾಲಿನಲ್ಲಿಯೂ ಐವತ್ತರಿಂದ
ನೂರು ಜನರಿದ್ದರು. 41ಯೇಸು ಐದು ರೊಟ್ಟಿಗಳನ್ನು ಮತ್ತು
ಎರಡು ಮೀನುಗಳನ್ನು ತೆಗೆದುಕೊಂಡು ಆಕಾಶದ ಕಡೆಗೆ
ನೋಡಿ ರೊಟ್ಟಿಗಾಗಿ ದೇವರಿಗೆ ಕೃತಜ್ಞತೆ ಸಲ್ಲಿಸಿದನು. ಬಳಿಕ
ರೊಟ್ಟಿಯನ್ನು ಮುರಿದು, ಅದನ್ನು ಶಿಷ್ಯರಿಗೆ ಕೊಟ್ಟು ಜನರಿಗೆಲ್ಲ
ಹಂಚಲು ತಿಳಿಸಿದನು. ಅಂತೆಯೇ ಎರಡು ಮೀನುಗಳನ್ನು
ಮುರಿದು ಜನರಿಗೆ ಹಂಚಬೇಕೆಂದು ಶಿಷ್ಯರಿಗೆ ಕೊಟ್ಟನು.
42ಜನರೆಲ್ಲರೂ ಊಟಮಾಡಿ ತೃಪ್ತರಾದರು. 43ಬಳಿಕ ಜನರು
ತಿನ್ನಲಾರದೆ ಉಳಿಸಿದ ರೊಟ್ಟಿ ಮತ್ತು ಮೀನುಗಳನ್ನು ಶಿಷ್ಯರು
ಶೇಖರಿಸಿದಾಗ ಹನ್ನೆರಡು ಬುಟ್ಟಿಗಳು ತುಂಬಿಹೋದವು.
44ಅಂದು ಸುಮಾರು ಐದು ಸಾವಿರ ಜನ ಊಟಮಾಡಿದರು.

### ನೀರಿನ ಮೇಲೆ ಕಾಲ್ನಡಿಗೆ

(ಮತ್ತಾಯ 14:22-23; ಯೋಹಾನ 6:15-21)

45ಆಗ ಯೇಸು ತನ್ನ ಶಿಷ್ಯರಿಗೆ ದೋಣಿಯೊಳಕ್ಕೆ ಬರುವಂತೆ
ತಿಳಿಸಿದನು. ಸರೋವರದ ಆಚೆಯ ದಡದಲ್ಲಿದ್ದ ಬೆತ್ಸಾಯಿದಕ್ಕೆ
ಹೋಗಬೇಕೆಂತಲೂ ಸ್ವಲ್ಪ ಸಮಯದ ನಂತರ ತಾನು
ಬರುವುದಾಗಿಯೂ ಯೇಸು ಅವರಿಗೆ ಹೇಳಿ ಕಳುಹಿಸಿದನು.
ತಮ್ಮ ತಮ್ಮ ಮನೆಗಳಿಗೆ ಹೋಗುವಂತೆ ಜನರಿಗೆ ತಿಳಿಸುವುದ
ಕ್ಕಾಗಿ ಯೇಸು ಅಲ್ಲಿ ಉಳಿದುಕೊಂಡನು. 46ಯೇಸು ಜನರನ್ನು
ಬೀಳ್ಕೊಟ್ಟ ಮೇಲೆ ಪ್ರಾರ್ಥಿಸುವುದಕ್ಕಾಗಿ ಬೆಟ್ಟದ ಮೇಲಕ್ಕೆ
ಹೋದನು.
47ಅಂದು ರಾತ್ರಿ ದೋಣಿಯು ಸರೋವರದ ಮಧ್ಯ
ದಲ್ಲಿಯೇ ಇದ್ದಿತು. ಯೇಸು ಒಬ್ಬನೇ ದಡದ ಮೇಲಿದ್ದನು.
48ದೋಣಿಯು ಸರೋವರದ ಮೇಲೆ ದೂರದಲ್ಲಿರುವುದನ್ನೂ
ಶಿಷ್ಯರು ಅದನ್ನು ದಡಕ್ಕೆ ಸಾಗಿಸಲು ಬಹಳ ಕಷ್ಟಪಡುತ್ತಿರು
ವುದನ್ನೂ ಯೇಸು ನೋಡಿದನು. ಗಾಳಿಯು ಅವರಿಗೆ ಪ್ರತಿ
ಕೂಲವಾಗಿ ಬೀಸುತ್ತಿತ್ತು. ಮುಂಜಾನೆ ಮೂರರಿಂದ ಆರು
ಗಂಟೆಯ ಸಮಯದಲ್ಲಿ, ಯೇಸು ನೀರಿನ ಮೇಲೆ ನಡೆದು
ಕೊಂಡು ದೋಣಿಯ ಸಮೀಪಕ್ಕೆ ಬಂದು ಅವರನ್ನು ಹಾದು
ಮುಂದೆ ಹೋಗುವುದರಲ್ಲಿದ್ದನು. 49ಆದರೆ ನೀರಿನ ಮೇಲೆ
ನಡೆಯುತ್ತಿದ್ದ ಆತನನ್ನು ಕಂಡ ಶಿಷ್ಯರು ಆತನನ್ನು ಭೂತವೆಂದು
ಭ್ರಮಿಸಿಕೊಂಡು ಭಯದಿಂದ ಕಿರುಚಿದರು. 50ಶಿಷ್ಯರೆಲ್ಲರೂ
ಯೇಸುವನ್ನು ನೋಡಿ ಬಹಳವಾಗಿ ಹೆದರಿದ್ದರು. ಆದರೆ ಯೇಸು

---

**ಇನ್ನೂರು ದಿನಾರಿ ನಾಣ್ಯ** ಒಬ್ಬನಿಗೆ ದೊರೆಯುತ್ತಿದ್ದ ಒಂದು ವರ್ಷದ ಆದಾಯ.

ಅವರೊಂದಿಗೆ ಮಾತನಾಡಿ, ‘‘ಚಿಂತಿಸದಿರಿ! ನಾನೇ! ಅಂಜಬೇಡಿ’’ ಎಂದು ಹೇಳಿದನು. [51]ನಂತರ ಯೇಸು ತನ್ನ ಶಿಷ್ಯರಿದ್ದ ದೋಣಿಯೊಳಕ್ಕೆ ಹತ್ತಿದನು. ಆಗ ಗಾಳಿಯು ನಿಂತುಹೋಯಿತು. ಶಿಷ್ಯರಿಗೆ ಬಹಳ ಆಶ್ಚರ್ಯವಾಯಿತು. [52]ಯೇಸು ಐದು ರೊಟ್ಟಿಗಳಿಂದ ಐದು ಸಾವಿರ ಜನರಿಗೆ ಊಟ ಮಾಡಿಸಿದ್ದನ್ನು ಅವರು ನೋಡಿದ್ದರೂ ಅದರ ಅರ್ಥವನ್ನು ಗ್ರಹಿಸಲಿಲ್ಲ. ಅವರು ಅದನ್ನು ಅರ್ಥಮಾಡಿಕೊಳ್ಳುವಷ್ಟು ಸಮರ್ಥರಾಗಿರಲಿಲ್ಲ.

[53]ಯೇಸುವಿನ ಶಿಷ್ಯರು ಸರೋವರವನ್ನು ದಾಟಿ ಗೆನಸರೇತ್ ಊರಿಗೆ ಬಂದು ದೋಣಿಯನ್ನು ತೀರದಲ್ಲಿ ಕಟ್ಟಿದರು. [54]ಅವರು ದೋಣಿಯಿಂದ ಹೊರಕ್ಕೆ ಬಂದಾಗ ಜನರು ಯೇಸುವನ್ನು ಗುರುತು ಹಿಡಿದರು. [55]ಯೇಸು ಬಂದಿರುವ ಸುದ್ದಿಯನ್ನು ಆ ಪ್ರದೇಶದಲ್ಲಿರುವ ಜನರಿಗೆಲ್ಲಾ ತಿಳಿಸುವುದಕ್ಕಾಗಿ ಅವರು ಓಡಿಹೋದರು. ಯೇಸು ಹೋದ ಸ್ಥಳಗಳಿಗೆಲ್ಲ ಜನರು ಕಾಯಿಲೆಯ ಜನರನ್ನು ಹಾಸಿಗೆಗಳ ಮೇಲೆ ತಂದರು. [56]ಯೇಸು ಆ ಪ್ರದೇಶದಲ್ಲಿದ್ದ ಪಟ್ಟಣಗಳಿಗೆ, ನಗರಗಳಿಗೆ ಮತ್ತು ತೋಟಗಳಿಗೆ ಹೋದನು. ಆತನು ಹೋದ ಕಡೆಗಳಲ್ಲೆಲ್ಲಾ ಜನರು ಮಾರುಕಟ್ಟೆಯ ಸ್ಥಳಗಳಿಗೆ ಕಾಯಿಲೆಯ ಜನರನ್ನು ಕರೆತಂದರು. ಅವರು ಯೇಸುವಿಗೆ, ನಿನ್ನ ಮೇಲಂಗಿಯ ಅಂಚನ್ನಾದರೂ ಮುಟ್ಟಲು ತಮಗೆ ಅವಕಾಶ ಕೊಡಬೇಕೆಂದು ಬೇಡಿಕೊಂಡರು. ಆತನನ್ನು ಸ್ಪರ್ಶಿಸಿದ ಜನರೆಲ್ಲರಿಗೂ ಗುಣವಾಯಿತು.

### ದೇವರ ಧರ್ಮಶಾಸ್ತ್ರ ಮತ್ತು ಜನರ ಸ್ವನಿಯಮ

(ಮತ್ತಾಯ 15:1-20)

7 ಕೆಲವು ಫರಿಸಾಯರು ಮತ್ತು ಧರ್ಮೋಪದೇಶಕರು ಜೆರುಸಲೇಮಿನಿಂದ ಬಂದರು. ಅವರು ಯೇಸುವಿನ ಸುತ್ತಲೂ ಒಟ್ಟಿಗೆ ಸೇರಿದರು. [2]ಯೇಸುವಿನ ಶಿಷ್ಯರಲ್ಲಿ ಕೆಲವರು ಕೈಗಳನ್ನು ತೊಳೆಯದೆ* ಅಶುದ್ಧವಾದ ಕೈಗಳಿಂದ ಊಟ ಮಾಡುತ್ತಿರುವುದನ್ನು ಫರಿಸಾಯರು ಮತ್ತು ಧರ್ಮೋಪದೇಶಕರು ನೋಡಿದರು. [3]ಫರಿಸಾಯರು ಮತ್ತು ಇತರ ಯೆಹೂದ್ಯರೆಲ್ಲರೂ ಸಂಪ್ರದಾಯದಂತೆ ಕೈಗಳನ್ನು ತೊಳೆಯದೆ ಊಟಮಾಡುತ್ತಿರಲಿಲ್ಲ. ತಮ್ಮ ಪಿತೃಗಳಿಂದ ಬಂದ ಆಚಾರಗಳನ್ನು ಅನುಸರಿಸುವುದಕ್ಕಾಗಿ ಅವರು ಹೀಗೆ ಮಾಡುತ್ತಿದ್ದರು. [4]ಅವರು ಏನನ್ನಾದರೂ ಮಾರುಕಟ್ಟೆಯಲ್ಲಿ ಕೊಂಡುಕೊಂಡರೆ, ವಿಶೇಷವಾದ ರೀತಿಯಲ್ಲಿ ಅದನ್ನು ತೊಳೆಯದೆ ತಿನ್ನುತ್ತಿರಲಿಲ್ಲ. ತಮ್ಮ ಪಿತೃಗಳಿಂದ ಬಂದ ಇತರ ಆಚಾರಗಳನ್ನು ಅಂದರೆ ಲೋಟ, ಬಟ್ಟಲು, ತಪ್ಪಲೆ ಮತ್ತು ದೋಲಿಗಳನ್ನು ತೊಳೆಯುವಾಗಲೂ ಈ ನಿಯಮಗಳನ್ನು ಅನುಸರಿಸುತ್ತಿದ್ದರು.

[5]ಫರಿಸಾಯರು ಮತ್ತು ಧರ್ಮೋಪದೇಶಕರು ಯೇಸುವಿಗೆ, ‘‘ನಮ್ಮ ಪಿತೃಗಳ ಸಂಪ್ರದಾಯವನ್ನು ನಿನ್ನ ಶಿಷ್ಯರು ಅನುಸರಿಸದೆ ಅಶುದ್ಧಯಾದ ಕೈಗಳಿಂದ ಆಹಾರವನ್ನು ತಿನ್ನುವುದೇಕೆ?’’ ಎಂದು ಕೇಳಿದರು.

[6]ಯೇಸು, ‘‘ನೀವೆಲ್ಲ ಕಪಟಿಗಳು. ನಿಮ್ಮ ಬಗ್ಗೆ ಯೆಶಾಯನು ಸರಿಯಾಗಿ ಹೇಳಿದ್ದಾನೆ:

‘ನನ್ನನ್ನು ಗೌರವಿಸುವುದಾಗಿ ಈ ಜನರು ಹೇಳುತ್ತಾರೆ, ಆದರೆ ಇವರ ಹೃದಯಗಳು ನನ್ನಿಂದ ಬಹು ದೂರವಾಗಿವೆ.

7 ಇವರು ನನ್ನನ್ನು ಆರಾಧಿಸುವುದು ಕೇವಲ ವ್ಯರ್ಥ. ಏಕೆಂದರೆ ಮಾನವ ನಿಯಮಗಳನ್ನೇ ಇವರು ಬೋಧಿಸುತ್ತಾರೆ.’

*ಯೆಶಾಯ 29:13*

[8]ನೀವು ದೇವರ ಆಜ್ಞೆಗಳಿಗೆ ವಿಧೇಯರಾಗದೆ ಜನರ ಸಂಪ್ರದಾಯಗಳನ್ನು ಅನುಸರಿಸುತ್ತಿರುವಿರಿ’’ ಎಂದು ಹೇಳಿದನು.
[9]ನಂತರ ಯೇಸು ಅವರಿಗೆ, ‘‘ನೀವು ನಿಮ್ಮ ಸಂಪ್ರದಾಯಗಳನ್ನು ಅನುಸರಿಸುವುದಕ್ಕಾಗಿ ದೇವರ ಆಜ್ಞೆಗಳನ್ನು ತಿರಸ್ಕರಿಸುವುದರಲ್ಲಿ ನಿಪುಣರಾಗಿದ್ದೀರಿ! [10]‘ನಿಮ್ಮ ತಂದೆ ತಾಯಿಗಳನ್ನು ಗೌರವಿಸಿರಿ’ * ಎಂತಲೂ ‘ಯಾವ ವ್ಯಕ್ತಿಯಾದರೂ ತನ್ನ ತಂದೆ ತಾಯಿಗಳಿಗೆ ಕೆಟ್ಟದ್ದನ್ನು ನುಡಿದರೆ ಅವನಿಗೆ ಮರಣ ದಂಡನೆ ಆಗಬೇಕು’ * ಎಂತಲೂ ಮೋಶೆಯು ಹೇಳಿದ್ದಾನೆ. [11]ಆದರೆ ನೀವು ಹೇಳುವುದೇನಂದರೆ, ಒಬ್ಬನು ತನ್ನ ತಂದೆತಾಯಿಗಳಿಗೆ, ‘ನಿಮ್ಮ ಸಹಾಯಕ್ಕಾಗಿ ನಾನು ಕೊಡತಕ್ಕದ್ದನ್ನೆಲ್ಲ ದೇವರಿಗೆ ಅರ್ಪಿಸಿದ್ದೇನೆ ಎಂದು ಹೇಳಬಹುದು’ ಎಂದು ಬೋಧಿಸಿ, [12]ತನ್ನ ತಂದೆತಾಯಿಗಳಿಗೆ ಸಹಾಯಮಾಡದಂತೆ ಅವನನ್ನು ತಡೆಗಟ್ಟುತ್ತೀರಿ. [13]ಹೀಗಿರಲು ದೇವರ ಆಜ್ಞೆಯನ್ನು ಅನುಸರಿಸುವುದಕ್ಕಿಂತಲೂ ನಿಮ್ಮ ಸಂಪ್ರದಾಯಗಳನ್ನು ಅನುಸರಿಸುವುದೇ ಬಹಳ ಮುಖ್ಯವೆಂದು ನೀವು ಬೋಧಿಸಿದಂತಾಯಿತು. ಇಂಥ ಅನೇಕ ಕಾರ್ಯಗಳನ್ನು ನೀವು ಮಾಡುತ್ತೀರಿ’’ ಎಂದು ಹೇಳಿದನು.

[14]ಯೇಸು ಜನರನ್ನು ಮತ್ತೆ ತನ್ನ ಬಳಿಗೆ ಕರೆದು, ‘‘ನಾನು ಹೇಳುವುದನ್ನು ಪ್ರತಿಯೊಬ್ಬರು ಕೇಳಿರಿ ಮತ್ತು ಅರ್ಥಮಾಡಿಕೊಳ್ಳಿರಿ. [15]ಒಬ್ಬ ವ್ಯಕ್ತಿಯ ಅಂತರಂಗದೊಳಕ್ಕೆ ಹೋಗಿ ಅವನನ್ನು ಅಶುದ್ಧನನ್ನಾಗಿ ಮಾಡುವಂಥದ್ದು ಯಾವುದೂ ಇಲ್ಲ. ಒಬ್ಬ ವ್ಯಕ್ತಿಯ ಒಳಗಿಂದ ಬಂದ ಸಂಗತಿಗಳೇ ಅಶುದ್ಧನನ್ನಾಗಿ ಮಾಡುತ್ತವೆ’’ ಎಂದು ಹೇಳಿದನು.

[16-17]ನಂತರ ಯೇಸು ಜನರನ್ನು ಅಲ್ಲೇ ಬಿಟ್ಟು ಮನೆಯೊಳಕ್ಕೆ ಹೋದನು. ಶಿಷ್ಯರು ಈ ಕಥೆಯ ಬಗ್ಗೆ ಯೇಸುವನ್ನು ಕೇಳಿದರು. [18]ಯೇಸು, ‘‘ನಿಮಗೂ ಅರ್ಥವಾಗುವುದಿಲ್ಲವೇ? ಒಬ್ಬ ವ್ಯಕ್ತಿಯ ಒಳಗೆ ಹೋಗುವ ಯಾವ ಪದಾರ್ಥವೂ ಅವನನ್ನು ಅಶುದ್ಧನನ್ನಾಗಿ ಮಾಡುವುದಿಲ್ಲ ಎಂಬುದು ನಿಮಗೆ ತಿಳಿದೇ ಇದೆ. [19]ಆಹಾರವು ಒಬ್ಬ ಮನುಷ್ಯನ ಹೃದಯದೊಳಕ್ಕೆ ಹೋಗದೆ ಹೊಟ್ಟೆಯೊಳಕ್ಕೆ ಹೋಗುತ್ತದೆ. ಅನಂತರ ಅದು ಅಲ್ಲಿಂದ ಹೊರಬರುತ್ತದೆ’’ ಎಂದು ಹೇಳಿದನು. (ಹೀಗೆ ತಿನ್ನತಕ್ಕ ಯಾವ ಆಹಾರವೂ ಅಶುದ್ಧವಲ್ಲವೆಂದು ಯೇಸು ಸೂಚಿಸಿದನು.)

[20]ಇದಲ್ಲದೆ ಯೇಸು ಅವರಿಗೆ, ‘‘ಒಬ್ಬ ಮನುಷ್ಯನಿಂದ ಹೊರಬರುವ ಸಂಗತಿಗಳೇ ಅವನನ್ನು ಅಶುದ್ಧನನ್ನಾಗಿ ಮಾಡುತ್ತವೆ. [21]ಒಬ್ಬ ವ್ಯಕ್ತಿಯ ಅಂತರಂಗದಲ್ಲಿ ಈ ಕೆಟ್ಟ

**ಕೈಗಳನ್ನು ತೊಳೆಯದೆ** ಅಂದರೆ ಫರಿಸಾಯರು ಜನರಿಗೆ ತಿಳಿಸಿದ ರೀತಿಯಲ್ಲಿ ಅವರು ತೊಳೆಯಲಿಲ್ಲ ಎಂದರ್ಥ.

**ನಿಮ್ಮ ... ಗೌರವಿಸಿರಿ** ವಿಮೋಚನ 20:12 ಧರ್ಮೋಪದೇಶ. 5:16.

**ಯಾವ ... ಆಗಬೇಕು** ವಿಮೋಚನ. 21:17.

ಆಲೋಚನೆಗಳೆಲ್ಲವೂ ಆರಂಭವಾಗುತ್ತವೆ: ದುರಾಲೋಚನೆ,
ಲೈಂಗಿಕ ಪಾಪ, ಕಳ್ಳತನ, ಕೊಲೆ, [22]ವ್ಯಭಿಚಾರ, ಹಣದಾಶೆ,
ಕೆಡುಕತನ, ಮೋಸ, ಭಂಡತನ, ಅಸೂಯೆ, ಚಾಡಿಕೋರತನ,
ಅಹಂಕಾರ ಮತ್ತು ಬುದ್ಧಿಗೇಡಿತನ. [23]ಈ ಕೆಟ್ಟ ವಿಷಯಗಳೆಲ್ಲಾ
ಮನುಷ್ಯನ ಅಂತರಂಗದಿಂದ ಬಂದು ಅವನನ್ನು ಅಶುದ್ಧನನ್ನಾಗಿ
ಮಾಡುತ್ತವೆ'' ಎಂದು ಹೇಳಿದನು.

### ಯೆಹೂದ್ಯಳಲ್ಲದ ಸ್ತ್ರೀಗೆ ಯೇಸುವಿನ ಸಹಾಯ

(ಮತ್ತಾಯ 15:21-28)

[24]ಯೇಸು ಆ ಸ್ಥಳವನ್ನು ಬಿಟ್ಟು, ಟೈರ್ ಪಟ್ಟಣದ
ಸುತ್ತಮುತ್ತಲಿನ ಪ್ರದೇಶಕ್ಕೆ ಹೋದನು. ಯೇಸು ಅಲ್ಲಿ ಒಂದು
ಮನೆಯೊಳಕ್ಕೆ ಹೋದನು. ತಾನು ಅಲ್ಲಿರುವುದು ಅಲ್ಲಿಯ
ಜನರಿಗೆ ತಿಳಿಯಬಾರದೆಂಬುದು ಆತನ ಅಪೇಕ್ಷೆಯಾಗಿತ್ತು.
ಆದರೆ ಯೇಸುವಿಗೆ ಅಡಗಿಕೊಳ್ಳಲಿಕಾಗಲಿಲ್ಲ. [25]ಯೇಸು
ಅಲ್ಲಿರುವನೆಂಬುದು ಒಬ್ಬ ಸ್ತ್ರೀಗೆ ತಿಳಿಯಿತು. ಅವಳ ಕಿರಿಯ
ಮಗಳಿಗೆ ದೆವ್ವ ಹಿಡಿದಿತ್ತು. ಆದ್ದರಿಂದ ಆ ಸ್ತ್ರೀಯು ಯೇಸುವಿನ
ಬಳಿಗೆ ಬಂದು, ಆತನ ಪಾದಗಳ ಮುಂದೆ ಅಡ್ಡಬಿದ್ದು ನಮಸ್ಕರಿ
ಸಿದಳು. [26]ಅವಳು ಸಿರಿಯ ಪ್ರದೇಶದ ಫೊಯಿನಿಕ್ಯದಲ್ಲಿ
ಹುಟ್ಟಿದ್ದಳು ಮತ್ತು ಗ್ರೀಕಳಾಗಿದ್ದಳು. ಆ ಸ್ತ್ರೀಯು ತನ್ನ
ಮಗಳಲ್ಲಿರುವ ದೆವ್ವವನ್ನು ಹೊರಗಟ್ಟಬೇಕೆಂದು ಯೇಸುವಿನಲ್ಲಿ
ಬೇಡಿಕೊಂಡಳು.

[27]ಯೇಸು ಆ ಸ್ತ್ರೀಗೆ, ''ಮಕ್ಕಳಿಗೆ ಕೊಡುವ ರೊಟ್ಟಿಯನ್ನು
ತೆಗೆದುಕೊಂಡು ನಾಯಿಗಳಿಗೆ ಕೊಡುವುದು ಸರಿಯಲ್ಲ.
ತಮಗೆ ಬೇಕಾದುದನ್ನು ಮಕ್ಕಳು ಮೊದಲು ತಿನ್ನಲಿ'' ಎಂದು
ಹೇಳಿದನು.

[28]ಆ ಸ್ತ್ರೀಯು, ''ಅದು ನಿಜ ಪ್ರಭು. ಆದರೆ ಮಕ್ಕಳು ತಿನ್ನದೆ
ಬಿಟ್ಟ ಆಹಾರದ ಚೂರುಗಳನ್ನು ಮೇಜಿನ ಕೆಳಗಿರುವ ನಾಯಿ
ಗಳು ತಿನ್ನಬಹುದಲ್ಲವೇ?'' ಎಂದು ಉತ್ತರಕೊಟ್ಟಳು. [29]ಆಗ
ಯೇಸು ಆ ಸ್ತ್ರೀಗೆ, ''ನೀನು ಒಳ್ಳೆಯ ಉತ್ತರ ಕೊಟ್ಟೆ. ಹೋಗು,
ನಿನ್ನ ಮಗಳನ್ನು ದೆವ್ವವು ಬಿಟ್ಟುಹೋಗಿದೆ'' ಎಂದು ಹೇಳಿದನು.
[30]ಆ ಸ್ತ್ರೀಯು ಮನೆಗೆ ಹೋದಾಗ ತನ್ನ ಮಗಳು ಹಾಸಿಗೆ
ಯಲ್ಲಿ ಮಲಗಿರುವುದನ್ನು ಕಂಡಳು. ದೆವ್ವವು ಅವಳನ್ನು ಬಿಟ್ಟು
ಹೋಗಿತ್ತು.

### ಕಿವುಡನಿಗೆ ಸ್ವಸ್ಥತೆ

[31]ನಂತರ ಯೇಸು ಟೈರ್‌ಪಟ್ಟಣದ ಆ ಪ್ರದೇಶವನ್ನು ಬಿಟ್ಟು
ಸಿದೋನ್ ಪಟ್ಟಣದ ಮಾರ್ಗವಾಗಿ ದೆಕಪೊಲಿ* ಪ್ರದೇಶ
ವನ್ನು ಹಾದು ಗಲಿಲೇಯ ಸರೋವರಕ್ಕೆ ಹೋದನು. [32] ಆತನು
ಅಲ್ಲಿದ್ದಾಗ, ಕೆಲವರು ಕಿವುಡನೂ ತೊದಲನೂ ಆಗಿದ್ದ ಒಬ್ಬ
ನನ್ನು ಯೇಸುವಿನ ಬಳಿಗೆ ಕರೆದುತಂದು ಅವನ ಮೇಲೆ
ಕೈಯಿಟ್ಟು ಗುಣಪಡಿಸಬೇಕೆಂದು ಬೇಡಿಕೊಂಡರು.

[33]ಯೇಸು ಅವನನ್ನು ಜನರಿಂದ ಸ್ವಲ್ಪ ದೂರ ತನ್ನೊಂದಿಗೆ
ಕರೆದೊಯ್ದು ತನ್ನ ಬೆರಳುಗಳನ್ನು ಅವನ ಕಿವಿಗಳಲ್ಲಿಟ್ಟು
ಉಗುಳಿ, ಅವನ ನಾಲಿಗೆಯನ್ನು ಮುಟ್ಟಿದನು. [34]ಬಳಿಕ
ಆಕಾಶದ ಕಡೆಗೆ ನೋಡಿ, ನಿಟ್ಟುಸಿರುಬಿಟ್ಟು, ''ಎಪ್ಫಥಾ'' ಎಂದು
ಹೇಳಿದನು. (ಎಪ್ಫಥಾ ಎಂದರೆ ''ತೆರೆಯಲಿ.'') [35]ಆಗ ಅವನ
ಕಿವಿಗಳು ತೆರೆದವು. ನಾಲಿಗೆ ಸಡಿಲಗೊಂಡಿತು. ಅವನು
ಸ್ಪಷ್ಟವಾಗಿ ಮಾತಾಡಿದನು.

[36]ಈ ಸಂಗತಿಯನ್ನು ಯಾರಿಗೂ ತಿಳಿಸಕೂಡದೆಂದು
ಯೇಸು ಜನರಿಗೆ ಆಜ್ಞಾಪಿಸಿದನು. ತನ್ನ ಬಗ್ಗೆ ಇತರ ಜನರಿಗೆ
ತಿಳಿಸಕೂಡದಂತೆ ಯೇಸು ಯಾವಾಗಲೂ ಆಜ್ಞಾಪಿಸುತ್ತಿದ್ದನು.
ಆದರೂ ಜನರು ಆತನ ಬಗ್ಗೆ ಇನ್ನೂ ಹೆಚ್ಚಾಗಿ ಹಬ್ಬಿಸಿದರು.
[37]ಜನರು ನಿಜವಾಗಿಯೂ ಅತ್ಯಾಶ್ಚರ್ಯಗೊಂಡು, ''ಯೇಸು
ಎಲ್ಲವನ್ನೂ ಒಳ್ಳೆಯ ರೀತಿಯಲ್ಲಿ ಮಾಡುತ್ತಾನೆ. ಆತನು
ಕಿವುಡರಿಗೆ ಕಿವಿ ಕೇಳಿಸುವಂತೆ ಮಾಡುತ್ತಾನೆ. ಮೂಕರು
ಮಾತಾಡುವಂತೆ ಮಾಡುತ್ತಾನೆ'' ಎಂದು ಹೇಳಿದರು.

### ನಾಲ್ಕು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮತ್ತಾಯ 15:32-39)

8 ಇನ್ನೊಂದು ಸಮಯದಲ್ಲಿ ಯೇಸುವಿನ ಜೊತೆಯಲ್ಲಿ
ಅನೇಕ ಜನರಿದ್ದರು. ಆ ಜನರ ಬಳಿ ಊಟಕ್ಕೆ ಏನೂ
ಇರಲಿಲ್ಲ. ಆದ್ದರಿಂದ ಯೇಸು ತನ್ನ ಶಿಷ್ಯರನ್ನು ಕರೆದು, [2]''ನಾನು
ಈ ಜನರಿಗಾಗಿ ಕನಿಕರಪಡುತ್ತೇನೆ. ಇವರು ಮೂರು ದಿನ
ಗಳಿಂದ ನನ್ನ ಜೊತೆಯಲ್ಲಿದ್ದಾರೆ. ಇವರ ಬಳಿ ಊಟಕ್ಕೆ ಏನೂ
ಇಲ್ಲ. [3]ಇವರು ಏನನ್ನೂ ತಿನ್ನದೆ ಹಸಿವೆಯಲ್ಲಿಯೇ ಹೊರಟರೆ
ದಾರಿಯಲ್ಲಿ ಬಳಲಿಹೋಗುವರು. ಈ ಜನರಲ್ಲಿ ಕೆಲವರು ಬಹಳ
ದೂರದಿಂದ ಬಂದಿದ್ದಾರೆ'' ಎಂದು ಹೇಳಿದನು.

[4]ಅದಕ್ಕೆ ಶಿಷ್ಯರು, ''ಇಲ್ಲಿಗೆ ಯಾವ ಊರೂ ಸಮೀಪ
ದಲ್ಲಿಲ್ಲ. ಈ ಜನರಿಗೆಲ್ಲಾ ಸಾಕಾಗುವಷ್ಟು ರೊಟ್ಟಿಯನ್ನು ನಾವು
ಎಲ್ಲಿಂದ ತರಲು ಸಾಧ್ಯ?'' ಎಂದು ಉತ್ತರಿಸಿದರು.

[5]ಯೇಸು, ''ನಿಮ್ಮ ಬಳಿ ಎಷ್ಟು ರೊಟ್ಟಿಗಳಿವೆ'' ಎಂದು
ಅವರನ್ನು ಕೇಳಿದನು.

ಅದಕ್ಕೆ ಶಿಷ್ಯರು, ''ನಮ್ಮ ಬಳಿ ಏಳು ರೊಟ್ಟಿಗಳಿವೆ'' ಎಂದು
ಉತ್ತರಿಸಿದರು.

[6]ಯೇಸು ಆ ಜನರಿಗೆ ನೆಲದ ಮೇಲೆ ಕುಳಿತುಕೊಳ್ಳುವಂತೆ
ಹೇಳಿದನು. ನಂತರ ಆ ಏಳು ರೊಟ್ಟಿಗಳನ್ನು ತೆಗೆದುಕೊಂಡು,
ದೇವರಿಗೆ ಸ್ತೋತ್ರ ಸಲ್ಲಿಸಿ ಅವುಗಳನ್ನು ಮುರಿದು, ತನ್ನ ಶಿಷ್ಯರಿಗೆ
ಕೊಟ್ಟು, ಅವುಗಳನ್ನು ಜನರಿಗೆ ಹಂಚಬೇಕೆಂದು ಹೇಳಿದನು.
ಶಿಷ್ಯರು ಹಾಗೆಯೇ ಮಾಡಿದರು. [7]ಶಿಷ್ಯರ ಬಳಿ ಕೆಲವು ಸಣ್ಣ
ಮೀನುಗಳೂ ಇದ್ದವು. ಯೇಸು ಆ ಮೀನುಗಳಿಗಾಗಿ ದೇವರಿಗೆ
ಕೃತಜ್ಞತೆ ಸಲ್ಲಿಸಿ ಅವುಗಳನ್ನೂ ಜನರಿಗೆ ಕೊಡಬೇಕೆಂದು ಶಿಷ್ಯರಿಗೆ
ಹೇಳಿದನು. [8]ಜನರೆಲ್ಲರೂ ಊಟಮಾಡಿ ತೃಪ್ತರಾದರು. ನಂತರ
ತಿನ್ನದೆ ಉಳಿದಿದ್ದ ಆಹಾರದ ಚೂರುಗಳನ್ನು ಶಿಷ್ಯರು
ಶೇಖರಿಸಿದಾಗ ಏಳು ಬುಟ್ಟಿಗಳು ತುಂಬಿಹೋದವು. [9]ಅಲ್ಲಿ
ಊಟಮಾಡಿದವರಲ್ಲಿ ಸುಮಾರು ನಾಲ್ಕು ಸಾವಿರ ಗಂಡಸರಿ
ದ್ದರು. ಅವರು ಊಟಮಾಡಿದ ಮೇಲೆ, ಯೇಸು ಅವರನ್ನು
ಕಳುಹಿಸಿಕೊಟ್ಟನು. [10]ಬಳಿಕ ಆತನು ತನ್ನ ಶಿಷ್ಯರೊಂದಿಗೆ
ದೋಣಿಯನ್ನು ಹತ್ತಿ ದಲ್ಮನೂಥ ಪ್ರದೇಶಕ್ಕೆ ಹೋದನು.

### ಯೇಸುವನ್ನು ಪರೀಕ್ಷಿಸಲು ಫರಿಸಾಯರ ಪ್ರಯತ್ನ

(ಮತ್ತಾಯ 16:1-4)

[11]ಫರಿಸಾಯರು ಯೇಸುವಿನ ಬಳಿಗೆ ಬಂದು, ಆತನನ್ನು
ಪರೀಕ್ಷಿಸಲು ಪ್ರಶ್ನೆಗಳನ್ನು ಕೇಳಿದರು. ಅವರು ಯೇಸುವಿಗೆ,

---

**ದೆಕಪೊಲಿ** ಅಂದರೆ ಹತ್ತು ಊರುಗಳು.

‘‘ನೀನು ದೇವರಿಂದ ಬಂದವನೆಂದು ತೋರಿಸಲು ಒಂದು
ಸೂಚಕಕಾರ್ಯವನ್ನು ಮಾಡು’’ ಎಂದರು. 12ಆಗ ಯೇಸು
ನಿಟ್ಟುಸಿರುಬಿಟ್ಟು ಅವರಿಗೆ, ‘‘ನೀವು ಸೂಚಕಕಾರ್ಯವನ್ನು
ನೋಡಬಯಸುವುದೇಕೆ? ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನಿಮಗೆ ಯಾವ ಸೂಚಕಕಾರ್ಯವನ್ನೂ ತೋರಿಸಲಾಗು
ವುದಿಲ್ಲ’’ ಎಂದು ಹೇಳಿದನು. 13ನಂತರ ಯೇಸು ಫರಿಸಾಯರ
ಬಳಿಯಿಂದ ಹೊರಟು ದೋಣಿಯಲ್ಲಿ ಸರೋವರದ ಆಚೆಯ
ದಡಕ್ಕೆ ಹೋದನು.

## ಯೆಹೂದ್ಯ ನಾಯಕರ ಬಗ್ಗೆ ಯೇಸು ನೀಡಿದ ಎಚ್ಚರಿಕೆ

(ಮತ್ತಾಯ 16:5-12)

14ಶಿಷ್ಯರು ದೋಣಿಯಲ್ಲಿ ಹೋಗುತ್ತಿದ್ದಾಗ ಅವರ
ಬಳಿಯಲ್ಲಿ ಒಂದೇ ಒಂದು ರೊಟ್ಟಿಯಿತ್ತು. ಅವರು ಮರೆತು
ಹೆಚ್ಚು ರೊಟ್ಟಿಗಳನ್ನು ತಂದಿರಲಿಲ್ಲ. 15ಯೇಸು ಅವರಿಗೆ, ‘‘ಜಾಗ
ರೂಕರಾಗಿರಿ! ಫರಿಸಾಯರ ಮತ್ತು ಹೆರೋದನ ಹುಳಿಹಿಟ್ಟಿನ
ಬಗ್ಗೆ ಎಚ್ಚರವಹಿಸಿರಿ’’ ಎಂದು ಎಚ್ಚರಿಸಿದನು. 16ಶಿಷ್ಯರು ಇದರ
ಅರ್ಥವನ್ನು ಚರ್ಚಿಸಿ, ‘‘ನಮ್ಮ ಬಳಿ ರೊಟ್ಟಿ ಇಲ್ಲದೆ ಇರುವು
ದರಿಂದ ಆತನು ಹೀಗೆ ಹೇಳಿದನು’’ ತಮ್ಮತಮ್ಮೊಳಗೆ ಅಂದು
ಕೊಂಡರು. 17ಶಿಷ್ಯರು ಇದರ ಬಗ್ಗೆ ಮಾತಾಡುತ್ತಿರುವುದು
ಯೇಸುವಿಗೆ ತಿಳಿದಿತ್ತು. ಆದ್ದರಿಂದ ಆತನು ಅವರಿಗೆ, ‘‘ರೊಟ್ಟಿ
ಇಲ್ಲವೆಂದು ನೀವು ಚರ್ಚಿಸುವುದೇಕೆ? ನಿಮಗಿನ್ನೂ
ಕಾಣುವುದಿಲ್ಲವೇ? ನಿಮಗಿನ್ನೂ ಅರ್ಥವಾಗುವುದಿಲ್ಲವೇ?
ನಿಮ್ಮ ಹೃದಯಗಳು ಇನ್ನೂ ಕಠಿಣವಾಗಿವೆಯೋ? 18ನಿಮ್ಮ
ಕಣ್ಣುಗಳು ಕುರುಡಾಗಿವೆಯೋ? ನಿಮ್ಮ ಕಿವಿಗಳು ಕಿವುಡಾ
ಗಿವೆಯೋ? ಮೊದಲೊಮ್ಮೆ, ನಮ್ಮ ಬಳಿ ಸಾಕಷ್ಟು ರೊಟ್ಟಿಗಳಿಲ್ಲ
ದಿದ್ದಾಗ, ನಾನು ಏನು ಮಾಡಿದೆನೆಂಬುದನ್ನು ಜ್ಞಾಪಿಸಿಕೊಳ್ಳಿ.
19ನಾನು ಐದು ಸಾವಿರ ಜನರಿಗಾಗಿ ಐದು ರೊಟ್ಟಿಗಳನ್ನು
ಮುರಿದು ನಿಮಗೆ ಕೊಟ್ಟೆ. ಅವರು ಊಟಮಾಡಿದ ಮೇಲೆ ತಿನ್ನ
ಲಾರದೆ ಬಿಟ್ಟ ಚೂರುಗಳನ್ನು ಎಷ್ಟು ಬುಟ್ಟಿಗಳಲ್ಲಿ ತುಂಬಿದಿರಿ
ಎಂಬುದು ನಿಮಗೆ ನೆನಪಿಲ್ಲವೇ?’’ ಎಂದು ಹೇಳಿದನು.

ಆ ಶಿಷ್ಯರು, ‘‘ನಾವು ಹನ್ನೆರಡು ಬುಟ್ಟಿಗಳಲ್ಲಿ ತುಂಬಿದೆವು’’
ಎಂದು ಉತ್ತರಿಸಿದರು.

20‘‘ನಾನು ನಾಲ್ಕು ಸಾವಿರ ಜನರಿಗಾಗಿ ಏಳು ರೊಟ್ಟಿಗಳನ್ನು
ಮುರಿದು ಕೊಟ್ಟದ್ದನ್ನು ಜ್ಞಾಪಿಸಿಕೊಳ್ಳಿ. ಅವರು ಊಟಮಾಡಿದ
ಮೇಲೆ ತಿನ್ನಲಾರದೆ ಬಿಟ್ಟ ಚೂರುಗಳನ್ನು ಎಷ್ಟು ಬುಟ್ಟಿಗಳಲ್ಲಿ
ತುಂಬಿದಿರಿ ಎಂಬುದು ನಿಮಗೆ ನೆನಪಿಲ್ಲವೇ?’’ ಎಂದು
ಕೇಳಿದನು. ಅದಕ್ಕೆ ಶಿಷ್ಯರು, ‘‘ನಾವು ಏಳು ಬುಟ್ಟಿಗಳನ್ನು
ತುಂಬಿದೆವು’’ ಎಂದು ಉತ್ತರಿಸಿದರು.

21ಆಗ ಯೇಸು ಅವರಿಗೆ, ‘‘ನಾನು ಮಾಡಿದ ಈ ಕಾರ್ಯ
ಗಳನ್ನು ನೀವು ಜ್ಞಾಪಕದಲ್ಲಿಟ್ಟುಕೊಂಡಿದ್ದೀರಿ, ಆದರೆ ನೀವಿನ್ನೂ
ಅರ್ಥಮಾಡಿಕೊಳ್ಳುವುದಿಲ್ಲವೇ?’’ ಎಂದು ಕೇಳಿದನು.

## ಬೆತ್ಸಾಯಿದದಲ್ಲಿ ಕುರುಡನಿಗೆ ದೃಷ್ಟಿದಾನ

22ಯೇಸು ಮತ್ತು ಆತನ ಶಿಷ್ಯರು ಬೆತ್ಸಾಯಿದಕ್ಕೆ ಬಂದರು.
ಕೆಲವು ಜನರು ಯೇಸುವಿನ ಬಳಿಗೆ ಒಬ್ಬ ಕುರುಡನನ್ನು ತಂದು
ಅವನನ್ನು ಮುಟ್ಟಬೇಕೆಂದು ಯೇಸುವನ್ನು ಬೇಡಿಕೊಂಡರು.
23ಆಗ ಯೇಸು ಆ ಕುರುಡನ ಕೈ ಹಿಡಿದುಕೊಂಡು, ಅವನನ್ನು
ಊರಿನಿಂದ ಹೊರಕ್ಕೆ ಕರೆದುಕೊಂಡು ಹೋದನು. ನಂತರ
ಯೇಸು ಅವನ ಕಣ್ಣುಗಳಲ್ಲಿ ಉಗುಳಿ ಅವನ ಮೇಲೆ ತನ್ನ ಕೈಗಳ
ನ್ನಿಟ್ಟು, ‘‘ಈಗ ನಿನಗೆ ಕಾಣುತ್ತದೆಯೋ?’’ ಎಂದು ಕೇಳಿದನು.

24ಆ ಕುರುಡನು ತಲೆಯೆತ್ತಿ ನೋಡಿ, ‘‘ಹೌದು, ನನಗೆ
ಜನರು ಕಾಣುತ್ತಾರೆ. ಅವರು ಮರಗಳಂತೆ ಕಂಡರೂ
ನಡೆದಾಡುತ್ತಿದ್ದಾರೆ’’ ಎಂದು ಹೇಳಿದನು.

25ಯೇಸು ತನ್ನ ಕೈಗಳನ್ನು ಮತ್ತೆ ಕುರುಡನ ಕಣ್ಣುಗಳ ಮೇಲೆ
ಇಟ್ಟನು. ಆಗ ಅವನು ತನ್ನ ಕಣ್ಣುಗಳನ್ನು ಅಗಲವಾಗಿ ತೆರೆದನು.
ಅವನ ಕಣ್ಣುಗಳು ಗುಣಹೊಂದಿದ್ದವು. ಅವನಿಗೆ ಎಲ್ಲವೂ
ಸ್ಪಷ್ಟವಾಗಿ ಕಾಣಿಸಿತು. 26ಯೇಸು ಅವನಿಗೆ, ‘‘ನೀನು ನೇರವಾಗಿ
ಮನೆಗೆ ಹೋಗು, ಊರೊಳಗೆ ಹೋಗಬೇಡ’’ ಎಂದು ಹೇಳಿ
ಕಳುಹಿಸಿದನು.

## ಯೇಸುವೇ ಕ್ರಿಸ್ತನೆಂದು ಪೇತ್ರನ ಪ್ರಕಟನೆ

(ಮತ್ತಾಯ 16:13-20; ಲೂಕ 9:18-21)

27ಯೇಸು ಮತ್ತು ಆತನ ಶಿಷ್ಯರು ಫಿಲಿಪ್ಪನ ಸೆಜರೇಯ
ಎಂಬ ಪಟ್ಟಣದ ಸಮೀಪದಲ್ಲಿರುವ ಊರುಗಳಿಗೆ ಹೋದರು.
ಅವರು ಪ್ರಯಾಣ ಮಾಡುತ್ತಿರುವಾಗ, ಯೇಸು ತನ್ನ ಶಿಷ್ಯರನ್ನು,
‘‘ನನ್ನನ್ನು ಜನರು ಯಾರೆಂದು ಹೇಳುತ್ತಾರೆ?’’ ಎಂದು
ಕೇಳಿದನು. 28ಅದಕ್ಕೆ ಶಿಷ್ಯರು, ‘‘ಕೆಲವರು ನಿನ್ನನ್ನು, ‘ಸ್ನಾನಿಕ
ಯೋಹಾನ’ ಎಂದು ಹೇಳುತ್ತಾರೆ. ಇನ್ನು ಕೆಲವರು ‘ಎಲೀಯ’
ಎಂದು ಹೇಳುತ್ತಾರೆ. ಇನ್ನು ಕೆಲವು ಜನರು, ನಿನ್ನನ್ನು ‘ಪ್ರವಾದಿ
ಗಳಲ್ಲಿ ಒಬ್ಬನು’ ಎನ್ನುತ್ತಾರೆ’’ ಎಂದು ಉತ್ತರಿಸಿದರು.

29ಆಗ ಯೇಸು ಅವರಿಗೆ, ‘‘ನೀವು ನನ್ನನ್ನು ಯಾರೆಂದು
ಹೇಳುತ್ತೀರಿ?’’ ಎಂದು ಕೇಳಿದನು. ಕೂಡಲೇ ಪೇತ್ರನು,
‘‘ನೀನು ಬರಬೇಕಾದ ಕ್ರಿಸ್ತನು’’ ಎಂದು ಉತ್ತರಿಸಿದನು.

30ಯೇಸು ತನ್ನ ಶಿಷ್ಯರಿಗೆ, ‘‘ನಾನು ಯಾರೆಂಬುದನ್ನು
ಯಾರಿಗೂ ಹೇಳಬೇಡಿ’’ ಎಂದು ಹೇಳಿದನು.

31ನಂತರ ಯೇಸು ತನ್ನ ಶಿಷ್ಯರಿಗೆ ಉಪದೇಶಿಸುತ್ತಾ
‘‘ಮನುಷ್ಯಕುಮಾರನು ಅನೇಕ ಕಷ್ಟಗಳನ್ನು ಅನುಭವಿಸಬೇಕಾ
ಗುತ್ತದೆ. ಹಿರಿಯ ಯೆಹೂದ್ಯನಾಯಕರು, ಮಹಾಯಾಜಕರು
ಮತ್ತು ಧರ್ಮೋಪದೇಶಕರು ಆತನನ್ನು ತಿರಸ್ಕರಿಸಿ ಕೊಲ್ಲು
ವರು. ಆದರೆ ಮೂರನೆಯ ದಿನದಲ್ಲಿ ಆತನು ಸತ್ತವರೊಳಗಿಂದ
ಜೀವಂತವಾಗಿ ಎದ್ದುಬರುತ್ತಾನೆ’’ ಎಂದು ಹೇಳಿದನು.
32ಮುಂದೆ ಸಂಭವಿಸುವದೆಲ್ಲವನ್ನು ಯೇಸು ಅವರಿಗೆ ಹೇಳಿ
ದನು. ಆತನು ಯಾವುದನ್ನೂ ರಹಸ್ಯವಾಗಿ ಇಡಲಿಲ್ಲ. ಪೇತ್ರನು
ಯೇಸುವನ್ನು ಸ್ವಲ್ಪದೂರ ಕರೆದೊಯ್ದು, ‘‘ನೀನು ಹಾಗೆಲ್ಲಾ
ಹೇಳಕೂಡದು’’ ಎಂದು ಪ್ರತಿಭಟಿಸಿದನು. 33 ಆದರೆ ಯೇಸು
ತನ್ನ ಶಿಷ್ಯರ ಕಡೆಗೆ ನೋಡಿ, ಪೇತ್ರನಿಗೆ, ‘‘ಸೈತಾನನೇ, ನನ್ನಿಂದ
ತೊಲಗಿಹೋಗು! ನಿನ್ನ ಆಲೋಚನೆ ಮನುಷ್ಯರದೇ ಹೊರತು
ದೇವರದಲ್ಲ’’ ಎಂದು ಗದರಿಸಿದನು.

34ನಂತರ ಯೇಸು ಜನರನ್ನು ತನ್ನ ಬಳಿಗೆ ಕರೆದನು. ಆತನ
ಶಿಷ್ಯರೂ ಅಲ್ಲಿದ್ದರು. ಯೇಸು ಅವರಿಗೆ, ‘‘ಯಾವನಿಗಾದರೂ
ನನ್ನನ್ನು ಅನುಸರಿಸಲು ಮನಸ್ಸಿದ್ದರೆ, ಅವನು ತನ್ನನ್ನು ನಿರಾಕರಿಸಿ
ತನ್ನ ಶಿಲುಬೆಯನ್ನು ಹೊತ್ತುಕೊಂಡು ನನ್ನನ್ನು ಹಿಂಬಾಲಿಸ
ಬೇಕು. 35ತನ್ನ ಪ್ರಾಣವನ್ನು ಕಾಪಾಡಿಕೊಳ್ಳಲು ಇಚ್ಛಿಸುವವನು
ಅದನ್ನು ಕಳೆದುಕೊಳ್ಳುತ್ತಾನೆ. ನನಗಾಗಿ ಹಾಗೂ ಸುವಾರ್ತೆಗಾಗಿ

ತನ್ನ ಪ್ರಾಣವನ್ನು ಕೊಡುವ ಪ್ರತಿಯೊಬ್ಬನೂ ತನ್ನ ಪ್ರಾಣವನ್ನು
ನಿರಂತರವಾಗಿ ಕಾಪಾಡಿಕೊಳ್ಳುತ್ತಾನೆ. 36ಒಬ್ಬನು ಪ್ರಪಂಚ
ವನ್ನೆಲ್ಲಾ ಸಂಪಾದಿಸಿಕೊಂಡು ತನ್ನ ಆತ್ಮವನ್ನೇ ನಷ್ಟಪಡಿಸಿ
ಕೊಂಡರೆ ಅದರಿಂದ ಅವನಿಗೆ ಪ್ರಯೋಜನವೇನು? 37ಒಬ್ಬನು
ತನ್ನ ಆತ್ಮವನ್ನು ಕೊಂಡುಕೊಳ್ಳಲು ಸಾಧ್ಯವೇ? 38ವ್ಯಭಿಚಾರಿಣಿ
ಯಂತಿರುವ ಈ ಕೆಟ್ಟ ಸಂತತಿಯವರಲ್ಲಿ ಯಾವನಾದರೂ
ನನಗೂ ನನ್ನ ಉಪದೇಶಕ್ಕೂ ನಾಚಿಕೊಂಡರೆ, ಮನುಷ್ಯ
ಕುಮಾರನಾದ ನಾನು ನನ್ನ ತಂದೆಯ ಮಹಿಮೆಯೊಂದಿಗೆ
ಪವಿತ್ರ ದೇವದೂತರ ಸಮೇತನಾಗಿ ಬರುವ ಸಮಯದಲ್ಲಿ
ಅವನ ಬಗ್ಗೆ ನಾಚಿಕೆಪಡುವೆನು'' ಎಂದು ಹೇಳಿದನು.

9 ಆಮೇಲೆ ಯೇಸು ಜನರಿಗೆ, ''ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ಇಲ್ಲಿ ನಿಂತಿರುವ ನಿಮ್ಮಲ್ಲಿ ಕೆಲವು ಜನರು
ತಾವು ಸಾಯುವುದಕ್ಕೆ ಮುಂಚೆ ದೇವರ ರಾಜ್ಯವು ಅಧಿಕಾರ
ದೊಡನೆ ಬರುವುದನ್ನು ನೋಡುತ್ತಾರೆ'' ಎಂದು ಹೇಳಿದನು.

## ಮೋಶೆ ಮತ್ತು ಎಲೀಯರೊಡನೆ ಯೇಸು
(ಮತ್ತಾಯ 17:1-13; ಲೂಕ 9:28-36)

2ಆರು ದಿನಗಳ ನಂತರ, ಪೇತ್ರ, ಯಾಕೋಬ ಮತ್ತು
ಯೋಹಾನರನ್ನು ಕರೆದುಕೊಂಡು ಯೇಸು ಎತ್ತರವಾದ ಬೆಟ್ಟದ
ಮೇಲೆ ಹೋದನು. ಅಲ್ಲಿ ಅವರು ಮಾತ್ರ ಇದ್ದರು. ಈ ಶಿಷ್ಯರು
ಯೇಸುವನ್ನು ನೋಡುತ್ತಿರಲು, ಇದ್ದಕ್ಕಿದ್ದಂತೆ ಆತನು
ರೂಪಾಂತರ ಹೊಂದಿದನು. 3ಯೇಸುವಿನ ಬಟ್ಟೆಗಳು
ಬಿಳುಪಾಗಿ ಹೊಳೆಯುತ್ತಿದ್ದವು. ಅಷ್ಟು ಬಿಳುಪಾದ ಬಟ್ಟೆಗಳನ್ನು
ತಯಾರಿಸಲು ಸಾಧ್ಯವಿರಲಿಲ್ಲ. 4ಆಗ ಮೋಶೆ ಮತ್ತು ಎಲೀಯ
ಅಲ್ಲಿ ಪ್ರತ್ಯಕ್ಷರಾಗಿ ಯೇಸುವಿನೊಂದಿಗೆ ಮಾತಾಡುತ್ತಿದ್ದರು.

5ಪೇತ್ರನು ಯೇಸುವಿಗೆ, ''ಗುರುವೇ, ನಾವು ಇಲ್ಲೇ
ಇರುವುದು ಒಳ್ಳೆಯದು. ನಾವು ಇಲ್ಲಿ ಮೂರು ಗುಡಾರಗಳನ್ನು
ಹಾಕುತ್ತೇವೆ. ಒಂದು ನಿನಗೆ, ಒಂದು ಮೋಶೆಗೆ ಮತ್ತೊಂದು
ಎಲೀಯನಿಗೆ'' ಎಂದು ಹೇಳಿದನು. 6ಪೇತ್ರನಿಗೆ ಏನು ಹೇಳ
ಬೇಕೊ ತಿಳಿಯಲಿಲ್ಲ. ಏಕೆಂದರೆ ಅವನು ಮತ್ತು ಉಳಿದ
ಇನ್ನಿಬ್ಬರು ಶಿಷ್ಯರು ಬಹಳ ಭಯಗೊಂಡಿದ್ದರು.

7ಆಗ ಮೋಡವು ಬಂದು, ಅವರನ್ನು ಮುಸುಕಿತು. ಆ
ಮೋಡದ ಒಳಗಿಂದ ಒಂದು ಧ್ವನಿಯು, ''ಈತನು ನನ್ನ ಪ್ರಿಯ
ಮಗನು. ಈತನಿಗೆ ವಿಧೇಯರಾಗಿ'' ಎಂದು ಹೇಳಿತು.

8ಆಗ ಪೇತ್ರ, ಯಾಕೋಬ ಮತ್ತು ಯೋಹಾನರು ಕಣ್ಣೆತ್ತಿ
ನೋಡಿದಾಗ ಯೇಸು ಒಬ್ಬನೇ ಅಲ್ಲಿದ್ದನು.

9ಯೇಸು ಮತ್ತು ಆ ಶಿಷ್ಯರು ಹಿಂತಿರುಗಿ ಬೆಟ್ಟದಿಂದ
ಕೆಳಗಿಳಿದು ಬರುತ್ತಿರುವಾಗ, ಆತನು ಅವರಿಗೆ, ''ನೀವು ಬೆಟ್ಟದ
ಮೇಲೆ ನೋಡಿದ ಸಂಗತಿಗಳ ಬಗ್ಗೆ ಯಾರಿಗೂ ಹೇಳಬೇಡಿ.
ಮನುಷ್ಯಕುಮಾರನು ಸತ್ತು ಜೀವಂತವಾಗಿ ಎದ್ದು ಬರುವವರೆಗೆ
ಕಾದುಕೊಂಡಿರಿ'' ಎಂದು ಆಜ್ಞಾಪಿಸಿದನು.

10ಆದ್ದರಿಂದ ಆ ಶಿಷ್ಯರು ಈ ಸಂಗತಿಗಳನ್ನು ಯಾರಿಗೂ
ತಿಳಿಸಲಿಲ್ಲ. ಆದರೆ ''ಸತ್ತು ಜೀವಂತವಾಗಿ ಎದ್ದುಬರುವುದು''
ಎಂದರೇನು? ಎಂದು ತಮ್ಮ ತಮ್ಮಲ್ಲಿಯೇ ಚರ್ಚಿಸಿದರು.
11ಶಿಷ್ಯರು ಯೇಸುವಿಗೆ, ''ಎಲೀಯನೇ ಮೊದಲು ಬರ
ಬೇಕೆಂದು ಧರ್ಮೋಪದೇಶಕರು ಹೇಳಲು ಕಾರಣವೇನು?''
ಎಂದು ಕೇಳಿದರು.

12ಯೇಸು ಅವರಿಗೆ, ''ಎಲೀಯನೇ ಮೊದಲು
ಬರಬೇಕೆಂದು ಅವರು ಹೇಳುವುದು ಸರಿ. ಎಲೀಯನು
ಎಲ್ಲವನ್ನು ಸರಿಪಡಿಸುತ್ತಾನೆ. ಆದರೆ ಮನುಷ್ಯಕುಮಾರನು
ಬಹಳ ಸಂಕಟವನ್ನು ಅನುಭವಿಸುವನೆಂತಲೂ ಜನರು ಆತನನ್ನು
ಹೀನೈಸುವರೆಂತಲೂ ಪವಿತ್ರ ಗ್ರಂಥವು ಏಕೆ ಹೇಳುತ್ತದೆ?
13ಎಲೀಯನು ಈಗಾಗಲೇ ಬಂದಿದ್ದಾನೆಂದು ನಾನು ನಿಮಗೆ
ಹೇಳುತ್ತೇನೆ ಮತ್ತು ಜನರು ತಮ್ಮ ಮನಸ್ಸಿಗೆ ಬಂದಂತೆ ಅವನಿಗೆ
ಕೇಡನ್ನು ಮಾಡಿದರು. ಅವನಿಗೆ ಹೀಗಾಗುವುದೆಂದು ಪವಿತ್ರ
ಗ್ರಂಥದಲ್ಲಿ ಮೊದಲೇ ಬರೆದಿತ್ತು'' ಎಂದು ಉತ್ತರಿಸಿದನು.

## ಯೇಸುವಿನಿಂದ ಕಾಯಿಲೆ ಹುಡುಗನಿಗೆ ಸ್ವಸ್ಥತೆ
(ಮತ್ತಾಯ 17:14-20; ಲೂಕ 9:37-43)

14ನಂತರ ಯೇಸು, ಪೇತ್ರ, ಯಾಕೋಬ ಮತ್ತು
ಯೋಹಾನ ಇತರ ಶಿಷ್ಯರ ಬಳಿಗೆ ಹೋದರು. ಆ ಶಿಷ್ಯರ
ಸುತ್ತಲೂ ಅನೇಕ ಜನರು ನೆರೆದಿದ್ದರು. ಧರ್ಮೋಪದೇಶಕರು
ಅವರೊಡನೆ ವಾದ ಮಾಡುತ್ತಾ ಇದ್ದರು. 15ಆ ಜನರು ಯೇಸು
ವನ್ನು ನೋಡಿದಾಗ ಬಹಳ ಆಶ್ಚರ್ಯಪಟ್ಟು ಆತನನ್ನು
ಸ್ವಾಗತಿಸಲು ಆತನ ಬಳಿಗೆ ಬಂದರು. 16ಯೇಸು, ''ನೀವು
ಯಾವುದರ ಬಗ್ಗೆ ವಾದಿಸುತ್ತಿದ್ದೀರಿ?'' ಎಂದು ಕೇಳಿದನು.

17ಒಬ್ಬನು, ''ಗುರುವೇ, ನನ್ನ ಮಗನಿಗೆ ದೆವ್ವಹಿಡಿದಿದ್ದ
ಕಾರಣ ನಾನು ಅವನನ್ನು ನಿನ್ನ ಶಿಷ್ಯರ ಬಳಿಗೆ ತಂದೆನು. ಅವನು
ಮಾತಾಡಲಾರ. 18ಆ ದೆವ್ವವು ಅವನ ಮೇಲೆ ಆಕ್ರಮಣ ಮಾಡಿ
ದಾಗಲೆಲ್ಲಾ ಅವನನ್ನು ನೆಲಕ್ಕೆ ಕೆಡವುತ್ತದೆ. ನನ್ನ ಮಗನು
ಬಾಯಿಂದ ನೊರೆ ಸುರಿಸುತ್ತಾ ಹಲ್ಲುಗಳನ್ನು ಕಟಕಟನೆ ಕಡಿ
ಯುತ್ತಾನೆ ಮತ್ತು ಬಹಳ ಬಿರುಸಾಗುತ್ತಾನೆ. ಅವನನ್ನು ಆ ದೆವ್ವ
ದಿಂದ ಬಿಡಿಸುವಂತೆ ನಾನು ನಿನ್ನ ಶಿಷ್ಯರನ್ನು ಕೇಳಿಕೊಂಡೆನು.
ಆದರೆ ಅವರಿಗೆ ಸಾಧ್ಯವಾಗಲಿಲ್ಲ'' ಎಂದು ಹೇಳಿದನು.

19ಯೇಸು, ''ವಿಶ್ವಾಸವಿಲ್ಲದ ಸಂತಾನವೇ, ನಾನು
ನಿಮ್ಮೊಡನೆ ಇನ್ನೆಷ್ಟು ಕಾಲ ಇರಲಿ? ಇನ್ನೆಷ್ಟು ಕಾಲ ಸಹಿಸಿ
ಕೊಳ್ಳಲಿ? ಆ ಹುಡುಗನನ್ನು ನನ್ನ ಬಳಿಗೆ ತನ್ನಿರಿ!'' ಎಂದು
ಉತ್ತರಿಸಿದನು. 20ಆಗ ಶಿಷ್ಯರು ಆ ಹುಡುಗನನ್ನು ಯೇಸುವಿನ
ಬಳಿಗೆ ತಂದರು. ಆ ದೆವ್ವವು ಯೇಸುವನ್ನು ನೋಡಿದ ಕೂಡಲೇ
ಆ ಹುಡುಗನ ಮೇಲೆ ಆಕ್ರಮಣ ಮಾಡಿತು. ಆ ಹುಡುಗನು
ಕೆಳಗೆ ಬಿದ್ದು, ಬಾಯಿಂದ ನೊರೆಯನ್ನು ಸುರಿಸುತ್ತಾ ಒದ್ದಾಡ
ತೊಡಗಿದನು.

21 ಯೇಸು, ''ಎಷ್ಟು ಕಾಲದಿಂದ ಹೀಗಾಗುತ್ತಿದೆ?'' ಎಂದು
ಆ ಹುಡುಗನ ತಂದೆಯನ್ನು ಕೇಳಿದನು.

22ಅದಕ್ಕೆ ತಂದೆಯು, ''ಬಾಲ್ಯದಿಂದಲೇ ಹೀಗಾಗುತ್ತಿದೆ.
ಆಗಿಂದಾಗ್ಗೆ ದೆವ್ವವು ಅವನನ್ನು ಕೊಲ್ಲಲು ಬೆಂಕಿಯೊಳಗೆ ಅಥವಾ
ನೀರಿನೊಳಗೆ ಎಸೆಯುತ್ತದೆ. ನಿನಗೆ ಸಾಧ್ಯವಿರುವುದಾದರೆ,
ದಯವಿಟ್ಟು ನಮ್ಮ ಮೇಲೆ ಕರುಣೆಯಿಟ್ಟು ಸಹಾಯಮಾಡು''
ಎಂದು ಉತ್ತರಿಸಿದನು.

23ಅದಕ್ಕೆ ಯೇಸು, '''ನಿನಗೆ ಸಾಧ್ಯವಿರುವುದಾದರೆ' ಎಂದು
ನೀನು ಹೇಳುವುದೇಕೆ? ನಂಬಿಕೆಯಿಡುವ ವ್ಯಕ್ತಿಗೆ ಎಲ್ಲವೂ
ಸಾಧ್ಯ'' ಎಂದು ಹೇಳಿದನು. 24ಆ ಹುಡುಗನ ತಂದೆಯು
ಸಂತೋಷದಿಂದ, ''ನಾನು ನಂಬುತ್ತೇನೆ. ಇನ್ನೂ ಹೆಚ್ಚಾಗಿ
ನಂಬಲು ನನಗೆ ಸಹಾಯ ಮಾಡು'' ಎಂದನು.

25ಅಲ್ಲಿ ನಡೆಯುತ್ತಿರುವುದನ್ನು ನೋಡಲು ಜನರೆಲ್ಲರೂ
ಓಡಿಬರುತ್ತಿರುವುದನ್ನು ಕಂಡ ಯೇಸು, ಆ ದೆವ್ವಕ್ಕೆ, ‘‘ಎಲೈ
ಕಿವುಡು ಮೂಕದೆವ್ವವೇ, ಈ ಹುಡುಗನಿಂದ ಹೊರಗೆ ಬರು
ವಂತೆಯೂ ಇವನೊಳಗೆ ಇನ್ನೆಂದಿಗೂ ಪ್ರವೇಶಿಸದಂತೆಯೂ
ನಾನು ನಿನಗೆ ಆಜ್ಞಾಪಿಸುತ್ತೇನೆ!’’ ಎಂದನು.
26ಆ ದೆವ್ವವು ಅರಚಿತು. ಅದು ಆ ಹುಡುಗನನ್ನು ಮತ್ತೆ
ನೆಲದ ಮೇಲೆ ಬೀಳಿಸಿ, ಒದ್ದಾಡಿಸಿ ಹೊರಬಂದಿತು. ಆ
ಹುಡುಗನು ಸತ್ತವನಂತೆ ಬಿದ್ದಿದ್ದನು. ಅನೇಕ ಜನರು, ‘‘ಅವನು
ಸತ್ತುಹೋದನು’’ ಎಂದರು. 27ಆದರೆ ಯೇಸು ಆ ಹುಡುಗನ
ಕೈ ಹಿಡಿದೆತ್ತಿ ಎದ್ದು ನಿಲ್ಲಲು ಅವನಿಗೆ ಸಹಾಯಮಾಡಿದನು.
28ಯೇಸು ಮನೆಯೊಳಗೆ ಹೋದ ಮೇಲೆ ಆತನ ಶಿಷ್ಯರು
ಪ್ರತ್ಯೇಕವಾದ ಸ್ಥಳದಲ್ಲಿ ಆತನಿಗೆ, ‘‘ಆ ದೆವ್ವವನ್ನು ಬಿಡಿಸಲು
ನಮಗೆ ಏಕೆ ಸಾಧ್ಯವಾಗಲಿಲ್ಲ?’’ ಎಂದು ಕೇಳಿದರು.
29ಯೇಸು, ‘‘ಈ ಬಗೆಯ ದೆವ್ವವನ್ನು ಪ್ರಾರ್ಥನೆಯಿಂದ
ಮಾತ್ರ ಬಿಡಿಸಲು ಸಾಧ್ಯ’’ ಎಂದು ಉತ್ತರಿಸಿದನು.

### ತನ್ನ ಮರಣದ ಬಗ್ಗೆ ಯೇಸುವಿನ ಪ್ರಕಟನೆ
(ಮತ್ತಾಯ 17:22-23; ಲೂಕ 9:43-45)

30ನಂತರ ಯೇಸು ಮತ್ತು ಆತನ ಶಿಷ್ಯರು ಆ ಸ್ಥಳದಿಂದ
ಹೊರಟು ಗಲಿಲೇಯದ ಮೂಲಕ ಪ್ರಯಾಣ ಮಾಡಿದರು.
ತಾವು ಎಲ್ಲಿದ್ದೇವೆಂಬುದು ಜನರಿಗೆ ತಿಳಿಯಬಾರದೆಂಬುದು
ಯೇಸುವಿನ ಉದ್ದೇಶವಾಗಿತ್ತು. 31ಏಕೆಂದರೆ ಆತನು ತನ್ನ
ಶಿಷ್ಯರಿಗೆ ಏಕಾಂತವಾಗಿ ಉಪದೇಶಿಸಬೇಕೆಂದಿದ್ದನು. ಯೇಸು
ಅವರಿಗೆ, ‘‘ಮನುಷ್ಯಕುಮಾರನನ್ನು ಜನರ ವಶಕ್ಕೆ ಕೊಡುವರು.
ಜನರು ಆತನನ್ನು ಕೊಲ್ಲುವರು. ಕೊಲ್ಲಲ್ಪಟ್ಟ ಮೂರನೆಯ
ದಿನದಲ್ಲಿ ಆತನು ಜೀವಂತವಾಗಿ ಎದ್ದು ಬರುವನು’’ ಎಂದು
ಹೇಳಿದನು. 32ಆದರೆ ಯೇಸು ಹೇಳಿದ್ದು ಶಿಷ್ಯರಿಗೆ ಅರ್ಥ
ವಾಗಲಿಲ್ಲ. ಮತ್ತು ಅದರ ಅರ್ಥವನ್ನು ಕೇಳುವುದಕ್ಕೂ ಅವರು
ಭಯಪಟ್ಟರು.

### ಯಾರು ಅತ್ಯಂತ ದೊಡ್ಡವರು?
(ಮತ್ತಾಯ 18:1-5; ಲೂಕ 9:46-48)

33ಯೇಸು ಮತ್ತು ಆತನ ಶಿಷ್ಯರು ಕಪೆರ್ನೌಮಿಗೆ
ಹೋದರು. ಅವರು ಒಂದು ಮನೆಯೊಳಗಿದ್ದಾಗ ಆತನು ತನ್ನ
ಶಿಷ್ಯರಿಗೆ, ‘‘ಈ ದಿನ ನೀವು ದಾರಿಯಲ್ಲಿ ವಾದಮಾಡುತ್ತಿದ್ದು
ದ್ದನ್ನು ಕೇಳಿಸಿಕೊಂಡೆ. ನೀವು ಯಾವುದರ ಬಗ್ಗೆ ವಾದಮಾಡುತ್ತಿ
ದ್ದಿರಿ?’’ ಎಂದನು. 34ಆದರೆ ಶಿಷ್ಯರು ಉತ್ತರಿಸಲಿಲ್ಲ. ಏಕೆಂದರೆ
ತಮ್ಮಲ್ಲಿ ಎಲ್ಲರಿಗಿಂತಲೂ ದೊಡ್ಡವನು ಯಾರೆಂಬುದರ ಕುರಿತು
ಅವರು ವಾಗ್ವಾದ ಮಾಡಿದ್ದರು. 35ಯೇಸು ಕುಳಿತುಕೊಂಡು,
ಹನ್ನೆರಡು ಜನ ಅಪೊಸ್ತಲರನ್ನು ತನ್ನ ಬಳಿಗೆ ಕರೆದು ಅವರಿಗೆ,
‘‘ನಿಮ್ಮಲ್ಲಿ ಅತ್ಯಂತ ಪ್ರಮುಖ ವ್ಯಕ್ತಿಯಾಗಬೇಕೆಂದು ಬಯಸು
ವವನು ಉಳಿದ ಎಲ್ಲರನ್ನು ತನಗಿಂತಲೂ ಹೆಚ್ಚು ಪ್ರಮುಖ
ರೆಂದು ಭಾವಿಸಿಕೊಂಡು ಎಲ್ಲರ ಸೇವೆ ಮಾಡಬೇಕು’’ ಎಂದು
ಹೇಳಿದನು.
36ನಂತರ ಯೇಸು ಒಂದು ಚಿಕ್ಕ ಮಗುವನ್ನು ಕರೆದು, ಆ
ಮಗುವನ್ನು ಶಿಷ್ಯರ ಮುಂದೆ ನಿಲ್ಲಿಸಿ, ಅದನ್ನು ತನ್ನ ಕೈಗಳಲ್ಲಿ
ಎತ್ತಿಕೊಂಡು ಅವರಿಗೆ, 37‘‘ನನ್ನ ಹೆಸರಿನಲ್ಲಿ ಇಂಥ ಮಕ್ಕಳನ್ನು
ಸ್ವೀಕರಿಸಿಕೊಳ್ಳುವವನು ನನ್ನನ್ನೇ ಸ್ವೀಕರಿಸಿಕೊಂಡಂತಾಯಿತು.
ನನ್ನನ್ನು ಸ್ವೀಕರಿಸಿಕೊಳ್ಳುವವನು, ನನ್ನನ್ನು ಕಳುಹಿಸಿದಾತನನ್ನೇ
ಸ್ವೀಕರಿಸಿಕೊಂಡಂತಾಯಿತು’’ ಎಂದು ಹೇಳಿದನು.

### ನಮ್ಮ ವೈರಿಯಲ್ಲದವನು ನಮ್ಮ ಮಿತ್ರನೇ
(ಲೂಕ 9:49-50)

38ಆಗ ಯೋಹಾನನು, ‘‘ಗುರುವೇ, ಯಾರೋ ಒಬ್ಬನು
ನಿನ್ನ ಹೆಸರಿನ ಮೂಲಕ ದೆವ್ವಗಳನ್ನು ಬಿಡಿಸುತ್ತಿರುವುದನ್ನು ನಾವು
ನೋಡಿದೆವು. ಅವನು ನಮ್ಮವನಲ್ಲ. ಆದ್ದರಿಂದ ನಿನ್ನ ಹೆಸರನ್ನು
ಹೇಳಕೂಡದೆಂದು ಅವನಿಗೆ ಹೇಳಿದೆವು’’ ಎಂದನು.
39ಯೇಸು ಅವರಿಗೆ, ‘‘ಅವನನ್ನು ತಡೆಯಬೇಡಿ. ನನ್ನ
ಹೆಸರಿನ ಮೂಲಕ ಅದ್ಭುತಕಾರ್ಯಗಳನ್ನು ಮಾಡುವವನು ಆ
ಕೂಡಲೇ ನನ್ನ ಬಗ್ಗೆ ಕೆಟ್ಟ ಸಂಗತಿಗಳನ್ನು ಹೇಳಲು ಸಾಧ್ಯವಿಲ್ಲ.
40ನಮ್ಮ ವೈರಿಯಲ್ಲದವನು ನಮ್ಮ ಮಿತ್ರನೇ ಸರಿ. 41ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ಕ್ರಿಸ್ತನವರೆಂದು ಯಾವ
ನಾದರೂ ನಿಮಗೆ ಕುಡಿಯಲು ನೀರು ಕೊಟ್ಟರೂ ಅವನಿಗೆ
ಅದರ ಪ್ರತಿಫಲ ಖಂಡಿತವಾಗಿ ಸಿಕ್ಕುವುದು.
42‘‘ನನ್ನಲ್ಲಿ ನಂಬಿಕೆಯಿಟ್ಟಿರುವ ಈ ಚಿಕ್ಕ ಮಕ್ಕಳಲ್ಲಿ
ಒಬ್ಬನನ್ನು ಪಾಪಕ್ಕೆ ನಡೆಸುವ ವ್ಯಕ್ತಿಯು ತನ್ನ ಕುತ್ತಿಗೆಗೆ ಬೀಸುವ
ಕಲ್ಲನ್ನು ಕಟ್ಟಿಕೊಂಡು, ಸಮುದ್ರದಲ್ಲಿ ಮುಳುಗುವುದೇ
ಒಳ್ಳೆಯದು. 43ನಿನ್ನ ಕೈ ನಿನ್ನನ್ನು ಪಾಪದಲ್ಲಿ ಸಿಲುಕಿಸುವುದಾದರೆ
ಅದನ್ನು ಕತ್ತರಿಸಿಬಿಡು. ಎರಡು ಕೈಗಳನ್ನು ಇಟ್ಟುಕೊಂಡು,
ನಂದಿಹೋಗದ ಬೆಂಕಿಯಿರುವ ನರಕಕ್ಕೆ ಹೋಗುವುದಕ್ಕಿಂತ
ಅಂಗವಿಕಲನಾಗಿದ್ದು ನಿತ್ಯ ಜೀವವನ್ನು ಪಡೆಯುವುದೇ ಮೇಲು.
ಆ ಸ್ಥಳದಲ್ಲಿ ಬೆಂಕಿ ಆರಿ ಹೋಗುವುದೇ ಇಲ್ಲ.
44 * 45‘‘ನಿನ್ನ ಕಾಲು ನಿನ್ನನ್ನು ಪಾಪದಲ್ಲಿ ಸಿಕ್ಕಿಸುವುದಾದರೆ,
ಅದನ್ನು ಕತ್ತರಿಸಿಬಿಡು. ಎರಡು ಕಾಲುಗಳನ್ನು ಇಟ್ಟುಕೊಂಡು
ನರಕದೊಳಗೆ ಎಸೆಯಲ್ಪಡುವುದಕ್ಕಿಂತ ಕುಂಟನಾಗಿರುವುದೇ
ಮೇಲು.
46 * 47‘‘ನಿನ್ನ ಕಣ್ಣು ನಿನ್ನನ್ನು ಪಾಪದಲ್ಲಿ ಸಿಲುಕಿಸುವು
ದಾದರೆ, ಅದನ್ನು ಕಿತ್ತುಬಿಡು. ಎರಡು ಕಣ್ಣುಗಳನ್ನಿಟ್ಟುಕೊಂಡು
ನರಕದೊಳಗೆ ಎಸೆಯಲ್ಪಡುವುದಕ್ಕಿಂತ ಒಂದೇ ಕಣ್ಣುಳ್ಳವ
ನಾಗಿದ್ದು ನಿತ್ಯಜೀವವನ್ನು ಹೊಂದಿಕೊಳ್ಳುವುದೇ ಮೇಲು.
48ನರಕದಲ್ಲಿ ಮನುಷ್ಯರನ್ನು ತಿನ್ನುವ ಹುಳುಗಳು ಸಾಯುವುದೇ
ಇಲ್ಲ ಮತ್ತು ಬೆಂಕಿಯು ಆರುವುದೇ ಇಲ್ಲ. 49ಪ್ರತಿಯೊಬ್ಬನನ್ನೂ
ಬೆಂಕಿಯಿಂದ ಶಿಕ್ಷಿಸಲಾಗುತ್ತದೆ.
50‘‘ಉಪ್ಪು ಒಳ್ಳೆಯದು. ಆದರೆ ಉಪ್ಪು ತನ್ನ ರುಚಿಯನ್ನು
ಕಳೆದುಕೊಂಡರೆ, ಅದನ್ನು ಮತ್ತೆ ನೀವು ಉಪ್ಪನ್ನಾಗಿ ಮಾಡ
ಲಾರಿರಿ. ಆದ್ದರಿಂದ ಒಳ್ಳೆಯತನದಿಂದ* ತುಂಬಿದವರಾಗಿರಿ
ಮತ್ತು ಒಬ್ಬರೊಡನೊಬ್ಬರು ಸಮಾಧಾನದಿಂದಿರಿ’’ ಎಂದು
ಹೇಳಿದನು.

---

**ವಚನ 44** ಕೆಲವು ಗ್ರೀಕ್ ಪ್ರತಿಗಳು 44ನೆ ವಚನವನ್ನು ಹೊಂದಿವೆ. ಈ ವಚನವು 48ನೆ ವಚನವೆ ಆಗಿದೆ.

**ವಚನ 46** ಕೆಲವು ಗ್ರೀಕ್ ಪ್ರತಿಗಳು 46ನೆ ವಚನವನ್ನು ಹೊಂದಿವೆ. ಈ ವಚನವು 48ನೆ ವಚನವೇ ಆಗಿದೆ.

**ಒಳ್ಳೆಯತನ** ಅಕ್ಷರಶಃ ‘‘ನಿಮ್ಮಲ್ಲಿ ಉಪ್ಪನ್ನು ಹೊಂದಿರಿ.’’

## ವಿವಾಹ ವಿಚ್ಛೇದನದ ಬಗ್ಗೆ ಯೇಸುವಿನ ಉಪದೇಶ
(ಮತ್ತಾಯ 19:1-12)

10 ನಂತರ ಯೇಸು ಆ ಸ್ಥಳವನ್ನು ಬಿಟ್ಟು ಜುದೇಯ
ಪ್ರಾಂತ್ಯಕ್ಕೆ ಹಾಗೂ ಜೋರ್ಡನ್ ನದಿಯ ಆಚೆದಡಕ್ಕೆ
ಹೋದನು. ಅನೇಕ ಜನರು ಮತ್ತೆ ಆತನ ಬಳಿಗೆ ಬಂದರು.
ಯೇಸು ಎಂದಿನಂತೆ ಆ ಜನರಿಗೆ ಉಪದೇಶಿಸಿದನು.
2ಕೆಲವು ಫರಿಸಾಯರು ಯೇಸುವಿನ ಬಳಿ ಬಂದು ಆತನನ್ನು
ಪರೀಕ್ಷಿಸಲು, ‘‘ಒಬ್ಬನು ತನ್ನ ಹೆಂಡತಿಯನ್ನು ಬಿಟ್ಟುಬಿಡುವುದು
ಸರಿಯೇ?’’ ಎಂದು ಕೇಳಿದರು.
3ಯೇಸು, ‘‘ಮೋಶೆ ನಿಮಗೆ ಏನು ಆಜ್ಞಾಪಿಸಿದ್ದಾನೆ?’’
ಎಂದು ಉತ್ತರಿಸಿದನು.
4ಫರಿಸಾಯರು, ‘‘ಒಬ್ಬನು ತನ್ನ ಹೆಂಡತಿಗೆ ವಿಚ್ಛೇದನ ಪತ್ರ
ಬರೆದುಕೊಟ್ಟು ಆಕೆಯನ್ನು ಬಿಟ್ಟು ಬಿಡಬಹುದೆಂದು
ಮೋಶೆಯು ಹೇಳಿದ್ದಾನೆ’’ ಎಂದರು.
5ಯೇಸು, ‘‘ನಿಮ್ಮ ಮೊಂಡುತನದ ನಿಮಿತ್ತ ಮೋಶೆಯು
ನಿಮಗೆ ಆ ಆಜ್ಞೆಯನ್ನು ಕೊಟ್ಟನು. 6ಆದರೆ ದೇವರು ಪ್ರಪಂಚ
ವನ್ನು ಸೃಷ್ಟಿಸಿದಾಗ, ‘ಮನುಷ್ಯರನ್ನು ಗಂಡನ್ನಾಗಿಯೂ ಹೆಣ್ಣ
ನ್ನಾಗಿಯೂ ನಿರ್ಮಿಸಿದನು.’ * 7‘ಆದಕಾರಣ ಪುರುಷನು ತನ್ನ
ತಂದೆತಾಯಿಗಳನ್ನು ಬಿಟ್ಟು ತನ್ನ ಹೆಂಡತಿಯನ್ನು ಸೇರಿಕೊಳ್ಳು
ವನು. 8ಮತ್ತು ಅವರಿಬ್ಬರು ಒಂದೇ ಶರೀರವಾಗುವರು.’ *
ಆದ್ದರಿಂದ ಅವರು ಇಬ್ಬರಲ್ಲ, ಒಬ್ಬರೇ. 9ಹೀಗಿರಲು ದೇವರು
ಸೇರಿಸಿದ್ದನ್ನು ಮನುಷ್ಯನು ಅಗಲಿಸಬಾರದು’’ ಎಂದು
ಹೇಳಿದನು.
10ಶಿಷ್ಯರು ಮತ್ತು ಯೇಸು ಒಂದು ಮನೆಯಲ್ಲಿದ್ದಾಗ,
ವಿವಾಹ ವಿಚ್ಛೇದನ ಪ್ರಶ್ನೆಯ ಬಗ್ಗೆ ಶಿಷ್ಯರು ಯೇಸುವನ್ನು ಮತ್ತೆ
ಕೇಳಿದರು. 11 ಅದಕ್ಕೆ ಯೇಸು, ‘‘ತನ್ನ ಹೆಂಡತಿಯನ್ನು ಬಿಟ್ಟು,
ಬೇರೆ ಸ್ತ್ರೀಯನ್ನು ಮದುವೆಯಾಗುವವನು ತನ್ನ ಹೆಂಡತಿಗೆ
ದ್ರೋಹಮಾಡಿ ವ್ಯಭಿಚಾರಿಯಾಗಿದ್ದಾನೆ. 12ತನ್ನ ಗಂಡನಿಗೆ
ವಿಚ್ಛೇದನ ಪತ್ರ ಕೊಟ್ಟು ಬೇರೆ ಪುರುಷನನ್ನು ಮದುವೆಯಾಗುವ
ಸ್ತ್ರೀಯೂ ವ್ಯಭಿಚಾರಿಣಿಯಾಗಿದ್ದಾಳೆ’’ ಎಂದು ಉತ್ತರಿಸಿದನು.

## ಚಿಕ್ಕ ಮಕ್ಕಳಿಗೆ ಯೇಸುವಿನ ಆಶೀರ್ವಾದ
(ಮತ್ತಾಯ 19:13-15; ಲೂಕ 18:15-17)

13ಜನರು, ತಮ್ಮ ಚಿಕ್ಕ ಮಕ್ಕಳನ್ನು ಮುಟ್ಟಿ
ಆಶೀರ್ವದಿಸಲೆಂದು ಅವರನ್ನು ಯೇಸುವಿನ ಬಳಿಗೆ ತಂದರು.
ಆದರೆ ಮಕ್ಕಳನ್ನು ಯೇಸುವಿನ ಬಳಿಗೆ ತರಕೂಡದೆಂದು ಶಿಷ್ಯರು
ಜನರನ್ನು ಗದರಿಸಿದರು. 14ಇದನ್ನು ಕಂಡ ಯೇಸು ಕೋಪ
ಗೊಂಡು ಅವರಿಗೆ, ‘‘ಚಿಕ್ಕ ಮಕ್ಕಳನ್ನು ನನ್ನ ಬಳಿಗೆ ಬರ
ಗೊಡಿಸಿರಿ. ಅವರನ್ನು ತಡೆಯಬೇಡಿ, ಏಕೆಂದರೆ ದೇವರ
ರಾಜ್ಯವು ಇಂಥವರದೇ. 15ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನೀವು ದೇವರ ರಾಜ್ಯವನ್ನು ಮಕ್ಕಳ ಮನೋಭಾವದಂತೆ
ಸ್ವೀಕರಿಸದಿದ್ದರೆ ನೀವು ಅದರೊಳಗೆ ಸೇರುವುದೇ ಇಲ್ಲ’’ ಎಂದು
ಹೇಳಿದನು. 16ನಂತರ ಯೇಸು ಮಕ್ಕಳನ್ನು ತನ್ನ ಕೈಗಳಿಂದ ಅಪ್ಪಿ
ಕೊಂಡು ಅವರ ಮೇಲೆ ತನ್ನ ಕೈಗಳನ್ನಿಟ್ಟು ಆಶೀರ್ವದಿಸಿದನು.

## ಯೇಸುವನ್ನು ಹಿಂಬಾಲಿಸಲು ಹಿಂಜರಿದ ಶ್ರೀಮಂತ
(ಮತ್ತಾಯ 19:16-30; ಲೂಕ 18:18-30)

17ಯೇಸು ಅಲ್ಲಿಂದ ಹೊರಡಬೇಕೆಂದಿದ್ದಾಗ ಒಬ್ಬನು ಓಡಿ
ಬಂದು, ಆತನ ಮುಂದೆ ತನ್ನ ಮೊಣಕಾಲೂರಿ, ‘‘ಒಳ್ಳೆಯ
ಉಪದೇಶಕನೇ, ನಿತ್ಯಜೀವವನ್ನು ಪಡೆಯಲು ನಾನು ಏನು
ಮಾಡಬೇಕು?’’ ಎಂದು ಕೇಳಿದನು.
18ಯೇಸು ಅದಕ್ಕೆ, ‘‘ನೀನು ನನ್ನನ್ನು ಒಳ್ಳೆಯವನೆಂದು
ಕರೆಯುವುದೇಕೆ? ಯಾವ ಮನುಷ್ಯನೂ ಒಳ್ಳೆಯವನಲ್ಲ.
ದೇವರು ಮಾತ್ರ ಒಳ್ಳೆಯವನು. 19ನೀನು ನಿತ್ಯಜೀವ ಹೊಂದ
ಬೇಕಾದರೆ ನಿನಗೆ ತಿಳಿದೇ ಇರುವ ಈ ಆಜ್ಞೆಗಳನ್ನು ಪಾಲಿಸು:
‘ಕೊಲೆ ಮಾಡಬೇಡ, ವ್ಯಭಿಚಾರ ಮಾಡಬೇಡ, ಕದಿಯಬೇಡ,
ಸುಳ್ಳು ಹೇಳಬೇಡ, ಮೋಸ ಮಾಡಬೇಡ, ಅಲ್ಲದೆ ನಿನ್ನ ತಂದೆ
ತಾಯಿಯರನ್ನು ಸನ್ಮಾನಿಸು’ * ಎಂದು ಉತ್ತರಿಸಿದನು.
20ಅವನು, ‘‘ಉಪದೇಶಕನೇ, ನಾನು ಬಾಲ್ಯದಿಂದಲೂ ಈ
ಆಜ್ಞೆಗಳಿಗೆಲ್ಲಾ ವಿಧೇಯನಾಗಿದ್ದೇನೆ’’ ಎಂದನು.
21ಯೇಸು ಆ ಮನುಷ್ಯನನ್ನು ಪ್ರೀತಿಯಿಂದ ದೃಷ್ಟಿಸಿ
ನೋಡಿ, ‘‘ನೀನು ಮಾಡಬೇಕಾದ ಕಾರ್ಯವೊಂದಿದೆ.
ಹೋಗಿ, ನಿನ್ನ ಆಸ್ತಿಯನ್ನೆಲ್ಲಾ ಮಾರಿ, ಬಂದ ಹಣವನ್ನು ಬಡವ
ರಿಗೆ ಕೊಡು. ನಿನಗೆ ಪರಲೋಕದಲ್ಲಿ ಪ್ರತಿಫಲ ಇರುವುದು.
ನಂತರ ಬಂದು, ನನ್ನನ್ನು ಹಿಂಬಾಲಿಸು’’ ಎಂದು ಹೇಳಿದನು.
22ಯೇಸುವಿನ ಈ ಮಾತನ್ನು ಕೇಳಿ ಅವನು ನಿರಾಶೆಯಿಂದ
ದುಃಖಗೊಂಡು ಹೊರಟುಹೋದನು. ಬಹಳ ಧನವಂತ
ನಾಗಿದ್ದ ಅವನು ತನ್ನ ಅಪಾರ ಆಸ್ತಿಯನ್ನು ಮಾರಲು ಇಷ್ಟ
ಪಡಲಿಲ್ಲ.
23ಬಳಿಕ ಯೇಸು ತನ್ನ ಶಿಷ್ಯರ ಕಡೆಗೆ ನೋಡಿ,
‘‘ಧನವಂತನು ದೇವರ ರಾಜ್ಯವನ್ನು ಪ್ರವೇಶಿಸುವುದು ಬಹಳ
ಕಷ್ಟ’’ ಎಂದನು.
24ಯೇಸುವಿನ ಈ ಮಾತನ್ನು ಕೇಳಿ ಶಿಷ್ಯರು ಬೆರಗಾದರು.
ಆದರೆ ಯೇಸು ಮತ್ತೆ, ‘‘ನನ್ನ ಮಕ್ಕಳೇ, ದೇವರ ರಾಜ್ಯವನ್ನು
ಪ್ರವೇಶಿಸುವುದು ಬಹಳ ಕಷ್ಟ! 25ಶ್ರೀಮಂತರು ದೇವರ
ರಾಜ್ಯವನ್ನು ಪ್ರವೇಶಿಸುವುದಕ್ಕಿಂತ ಒಂಟೆಯು ಸೂಜಿಯ ಕಣ್ಣಿನ
ಮೂಲಕ ನುಸುಳಿ ಹೋಗುವುದು ಸುಲಭ!’’ ಎಂದನು.
26ಶಿಷ್ಯರು ಇನ್ನೂ ಬೆರಗಾಗಿ, ಒಬ್ಬರಿಗೊಬ್ಬರು,
‘‘ಹಾಗಾದರೆ ರಕ್ಷಣೆಹೊಂದಲು ಯಾರಿಗೆ ಸಾಧ್ಯ?’’ ಎಂದು
ಮಾತಾಡಿಕೊಂಡರು. 27ಯೇಸು ಶಿಷ್ಯರ ಕಡೆಗೆ ನೋಡಿ, ‘‘ಇದು
ಮನುಷ್ಯರಿಗಷ್ಟೇ ಅಸಾಧ್ಯ,ದೇವರಿಗಲ್ಲ’’ ಎಂದನು.
28ಪೇತ್ರನು ಯೇಸುವಿಗೆ, ‘‘ನಿನ್ನನ್ನು ಹಿಂಬಾಲಿಸಲು ನಾವು
ಎಲ್ಲವನ್ನೂ ತ್ಯಜಿಸಿದೆವು!’’ ಎಂದನು.
29ಯೇಸು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನನಗಾಗಿ ಮತ್ತು ಸುವಾರ್ತೆಗಾಗಿ ತನ್ನ ಮನೆಯನ್ನಾಗಲಿ,
ಸಹೋದರರನ್ನಾಗಲಿ, ಸಹೋದರಿಯರನ್ನಾಗಲಿ, ತಾಯಿಯ
ನ್ನಾಗಲಿ, ತಂದೆಯನ್ನಾಗಲಿ, ಮಕ್ಕಳನ್ನಾಗಲಿ, ಭೂಮಿಯ
ನ್ನಾಗಲಿ ತ್ಯಜಿಸಿದ ಪ್ರತಿಯೊಬ್ಬ ವ್ಯಕ್ತಿಯೂ 30ನೂರರಷ್ಟು
ಹೆಚ್ಚಾಗಿ ಪಡೆಯುತ್ತಾನೆ. ಈ ಪ್ರಪಂಚದಲ್ಲಿ ಅವನು ಅನೇಕ
ಮನೆಗಳನ್ನು, ಸಹೋದರರನ್ನು, ಸಹೋದರಿಯರನ್ನು,

---

**ಮನುಷ್ಯರನ್ನು … ನಿರ್ಮಿಸಿದನು** ಆದಿಕಾಂಡ 1:27.

**ಆದಕಾರಣ … ಶರೀರವಾಗುವರು** ಆದಿಕಾಂಡ 2:24.

**ಕೊಲೆ … ಸನ್ಮಾನಿಸು** ವಿಮೋಚನ 20:12-16, ಧರ್ಮೋಪದೇಶ. 5:16-20.

ತಾಯಂದಿರನ್ನು, ಮಕ್ಕಳನ್ನು ಮತ್ತು ಭೂಮಿಯನ್ನು
ಹಿಂಸೆಗಳೊಂದಿಗೆ ಪಡೆದುಕೊಳ್ಳುವನು. ಅಲ್ಲದೆ ಬರಲಿರುವ
ಲೋಕದಲ್ಲಿ ಅವನು ನಿತ್ಯಜೀವವನ್ನೂ ಹೊಂದಿಕೊಳ್ಳುವನು.
31 ಆದರೆ ಮೊದಲನೆಯವರಲ್ಲಿ ಅನೇಕರು ಕಡೆಯವರಾಗು
ವರು; ಕಡೆಯವರಲ್ಲಿ ಅನೇಕರು ಮೊದಲಿನವರಾಗುವರು''
ಎಂದು ಹೇಳಿದನು.

### ತನ್ನ ಮರಣದ ಕುರಿತು ಯೇಸುವಿನ ಮೂರನೆ ಪ್ರಕಟನೆ

(ಮತ್ತಾಯ 20:17-19; ಲೂಕ 18:31-34)

32 ಯೇಸು ಮತ್ತು ಆತನ ಜೊತೆಯಲ್ಲಿದ್ದ ಜನರು
ಜೆರುಸಲೇಮಿಗೆ ಹೋಗುತ್ತಿರಲು ಯೇಸು ಅವರೆಲ್ಲರಿಗಿಂತ
ಮುಂದೆ ಹೋಗುತ್ತಿದ್ದನು. ಅದನ್ನು ನೋಡಿ ಯೇಸುವಿನ
ಶಿಷ್ಯರು ಬೆರಗಾದರು. ಅವರನ್ನು ಹಿಂಬಾಲಿಸಿ ಬರುತ್ತಿದ್ದ ಜನರು
ಭಯಗೊಂಡರು. ಯೇಸು ಹನ್ನೆರಡು ಜನ ಅಪೊಸ್ತಲರನ್ನು ತನ್ನ
ಬಳಿಗೆ ಕರೆದು, ಜೆರುಸಲೇಮಿನಲ್ಲಿ ತನಗೆ ಸಂಭವಿಸಲಿರು
ವುದನ್ನು ಅವರಿಗೆ ಹೇಳುತ್ತಾ,
33 ''ನಾನು ಜೆರುಸಲೇಮಿಗೆ ಹೋಗುತ್ತಿದ್ದೇನೆ.
ಮನುಷ್ಯಕುಮಾರನನ್ನು ಮಹಾಯಾಜಕರಿಗೂ ಧರ್ಮೋಪ
ದೇಶಕರಿಗೂ ಒಪ್ಪಿಸಿಕೊಡುವರು. ಅವರು ಆತನಿಗೆ ಮರಣ
ದಂಡನೆ ವಿಧಿಸಿ ಯೆಹೂದ್ಯರಲ್ಲದ ಜನರಿಗೆ ಒಪ್ಪಿಸುತ್ತಾರೆ. 34 ಆ
ಜನರು ಆತನನ್ನು ನೋಡಿ ಅಪಹಾಸ್ಯ ಮಾಡುತ್ತಾರೆ, ಆತನ
ಮೇಲೆ ಉಗುಳುತ್ತಾರೆ, ಆತನನ್ನು ಬಾರು ಕೋಲಿನಿಂದ
ಹೊಡೆಯುತ್ತಾರೆ ಮತ್ತು ಕೊಲ್ಲುತ್ತಾರೆ. ಆದರೆ ಆತನು
ಮೂರನೆಯ ದಿನದಂದು ಮತ್ತೆ ಜೀವಂತವಾಗಿ ಎದ್ದು
ಬರುತ್ತಾನೆ'' ಎಂದು ತಿಳಿಸಿದನು.

### ಯಾಕೋಬ ಮತ್ತು ಯೋಹಾನರ ವಿಶೇಷ ಕೋರಿಕೆ

(ಮತ್ತಾಯ 20:20-28)

35 ನಂತರ ಜೆಬೆದಾಯನ ಮಕ್ಕಳಾದ ಯಾಕೋಬ ಮತ್ತು
ಯೋಹಾನರು ಯೇಸುವಿನ ಬಳಿಗೆ ಬಂದು, ''ಗುರುವೇ, ನಮ್ಮ
ಒಂದು ಕೋರಿಕೆಯನ್ನು ನೀನು ನಡೆಸಿಕೊಡಬೇಕು'' ಎಂದರು.
36 ಯೇಸು, ''ನಿಮ್ಮ ಯಾವ ಕೋರಿಕೆಯನ್ನು ನಡೆಸಿಕೊಡ
ಬೇಕು?'' ಎಂದು ಕೇಳಿದನು.
37 ಅವರು, ''ನೀನು ನಿನ್ನ ರಾಜ್ಯದಲ್ಲಿ ವೈಭವದಿಂದಿರುವಾಗ
ನಮ್ಮಲ್ಲಿ ಒಬ್ಬನು ನಿನ್ನ ಬಲಗಡೆಯಲ್ಲಿಯೂ ಮತ್ತೊಬ್ಬನು ನಿನ್ನ
ಎಡಗಡೆಯಲ್ಲಿಯೂ ಕುಳಿತುಕೊಳ್ಳುವಂತೆ ಅನುಗ್ರಹಿಸು''
ಎಂದು ಉತ್ತರಿಸಿದರು.
38 ಯೇಸು, ''ನೀವು ಏನು ಕೇಳುತ್ತಿದ್ದೀರಿ ಎಂಬುದು ನಿಮಗೆ
ತಿಳಿದಿಲ್ಲ. ನಾನು ಕುಡಿಯ ಬೇಕಾಗಿರುವ ಸಂಕಟದ ಪಾತ್ರೆಯಲ್ಲಿ
ಕುಡಿಯಲು ನಿಮಗೆ ಸಾಧ್ಯವೇ? ನಾನು ಹೊಂದಬೇಕಾಗಿರುವ
ದೀಕ್ಷಾಸ್ನಾನವನ್ನು ನೀವು ಹೊಂದಲು ಸಾಧ್ಯವೇ?'' ಎಂದನು.
39 ಅವರು, ''ಹೌದು, ನಮಗೆ ಸಾಧ್ಯ'' ಎಂದು
ಉತ್ತರಿಸಿದರು.

ಯೇಸು ಅವರಿಗೆ, ''ನಾನು ಕುಡಿಯಬೇಕಾಗಿರುವ
ಸಂಕಟದ ಪಾತ್ರೆಯಲ್ಲಿ ನೀವು ಕುಡಿಯುವಿರಿ. ನಾನು ಹೊಂದ
ಬೇಕಾಗಿರುವ ದೀಕ್ಷಾಸ್ನಾನವನ್ನು ನೀವೂ ಹೊಂದುವಿರಿ.
40 ಆದರೆ ನನ್ನ ಎಡಗಡೆ ಅಥವಾ ಬಲಗಡೆ ಕುಳಿತುಕೊಳ್ಳುವ
ವ್ಯಕ್ತಿಯನ್ನು ಆರಿಸುವವನು ನಾನಲ್ಲ. ಆ ಸ್ಥಳಗಳನ್ನು ಯಾರಿಗಾಗಿ
ಸಿದ್ಧಪಡಿಸಲಾಗಿದೆಯೋ ಅವರಿಗಾಗಿಯೇ ಅವುಗಳನ್ನು
ಕಾದಿರಿಸಲಾಗಿದೆ'' ಎಂದನು.
41 ಉಳಿದ ಹತ್ತು ಜನ ಶಿಷ್ಯರು ಇದನ್ನು ಕೇಳಿ ಯಾಕೋಬ
ಮತ್ತು ಯೋಹಾನರ ಮೇಲೆ ಕೋಪಗೊಂಡರು. 42 ಯೇಸು
ಎಲ್ಲಾ ಶಿಷ್ಯರನ್ನು ಒಟ್ಟಾಗಿ ಕರೆದು, ''ಯೆಹೂದ್ಯರಲ್ಲದವರು
ಅಧಿಪತಿಗಳನ್ನು ಹೊಂದಿದ್ದಾರೆ. ಆ ಅಧಿಪತಿಗಳು ಜನರ ಮೇಲೆ
ತಮಗಿರುವ ಅಧಿಕಾರವನ್ನು ತೋರಿಸಲು ಇಷ್ಟಪಡು
ತ್ತಾರೆಂಬುದು ನಿಮಗೆ ತಿಳಿದಿದೆ. ಅವರ ಪ್ರಮುಖ ನಾಯಕರು
ಗಳು ಜನರ ಮೇಲೆ ತಮಗಿರುವ ಅಧಿಕಾರವನ್ನೆಲ್ಲಾ ಉಪ
ಯೋಗಿಸಲು ಇಷ್ಟಪಡುತ್ತಾರೆ. 43 ಆದರೆ ನೀವು ಅವರಂತಾಗ
ಬಾರದು.
44 ನಿಮ್ಮಲ್ಲಿ ಪ್ರಮುಖನಾಗಬೇಕೆಂದು ಬಯಸುವವನು
ಸೇವಕನಂತೆ ಮತ್ತು ಗುಲಾಮನಂತೆ ನಿಮ್ಮೆಲ್ಲರ ಸೇವೆ
ಮಾಡಬೇಕು. 45 ಅದೇ ರೀತಿ ಮನುಷ್ಯಕುಮಾರನು ಜನರಿಂದ
ಸೇವೆಮಾಡಿಸಿಕೊಳ್ಳಲು ಬರದೆ, ಜನರ ಸೇವೆ ಮಾಡಲು
ಬಂದನು. ಮನುಷ್ಯಕುಮಾರನು ಅನೇಕ ಜನರನ್ನು ರಕ್ಷಿಸುವು
ದಕ್ಕಾಗಿ ತನ್ನ ಪ್ರಾಣವನ್ನೇ ಈಡು ಕೊಡಲು ಬಂದನು.

### ಕುರುಡನಿಗೆ ದೃಷ್ಟಿದಾನ

(ಮತ್ತಾಯ 20:29-34; ಲೂಕ 18:35-43)

46 ನಂತರ ಅವರು ಜೆರಿಕೊ ಎಂಬ ಊರಿಗೆ ಬಂದರು.
ಯೇಸು ತನ್ನ ಶಿಷ್ಯರೊಂದಿಗೆ ಮತ್ತು ಇತರ ಅನೇಕ ಜನರೊಂದಿಗೆ
ಆ ಊರನ್ನು ಬಿಟ್ಟು ಹೊರಟಿದ್ದನು. ತಿಮಾಯನ ಮಗನಾದ
ಬಾರ್ತಿಮಾಯ ಎಂಬ ಕುರುಡನು ರಸ್ತೆಯ ಪಕ್ಕದಲ್ಲಿ ಕುಳಿತು
ಕೊಂಡು ಭಿಕ್ಷೆ ಬೇಡುತ್ತಿದ್ದನು. 47 ನಜರೇತಿನ ಯೇಸು ಆ
ಮಾರ್ಗವಾಗಿ ಹೋಗುತ್ತಿದ್ದಾನೆಂದು ಅವನು ಕೇಳಿ,
''ಯೇಸುವೇ, ದಾವೀದನ ಕುಮಾರನೇ, ದಯವಿಟ್ಟು ನನ್ನನ್ನು
ಕರುಣಿಸು!'' ಎಂದು ಗಟ್ಟಿಯಾಗಿ ಕೂಗಿದನು.
48 ಅನೇಕ ಜನರು ಆ ಕುರುಡನನ್ನು ಗದರಿಸಿ
ಕೂಗಕೂಡದೆಂದು ಅವನಿಗೆ ಹೇಳಿದರು. ಆದರೆ ಆ ಕುರುಡನು,
''ದಾವೀದನ ಕುಮಾರನೇ, ನನ್ನನ್ನು ಕರುಣಿಸು!'' ಎಂದು ಮತ್ತೆ
ಮತ್ತೆ ಕೂಗಿದನು. 49 ಯೇಸು ನಿಂತುಕೊಂಡು, ''ಅವನನ್ನು
ಕರೆಯಿರಿ'' ಎಂದು ಹೇಳಿದನು.

ಆದ್ದರಿಂದ ಅವರು ಆ ಕುರುಡನನ್ನು ಕರೆದು,
''ಸಂತೋಷಪಡು! ಎದ್ದುನಿಲ್ಲು! ಯೇಸು ನಿನ್ನನ್ನು ಕರೆಯು
ತ್ತಿದ್ದಾನೆ'' ಎಂದರು. 50 ಆ ಕುರುಡನು ಕೂಡಲೇ ಎದ್ದುನಿಂತು
ತನ್ನ ಹೊದಿಕೆಯನ್ನು ಅಲ್ಲಿಯೇ ಬಿಟ್ಟು ಯೇಸುವಿನ ಬಳಿಗೆ
ಹೋದನು.
51 ಯೇಸು, ''ನನ್ನಿಂದ ನಿನಗೆ ಏನಾಗಬೇಕು?'' ಎಂದು
ಅವನನ್ನು ಕೇಳಿದನು. ಆ ಕುರುಡನು, ''ಗುರುವೇ, ನನಗೆ ಕಣ್ಣು
ಕಾಣುವಂತೆ ಮಾಡು'' ಎಂದು ಉತ್ತರಿಸಿದನು.
52 ಯೇಸು, ''ಹೋಗು, ನೀನು ನಂಬಿದ್ದರಿಂದ ನಿನಗೆ
ಗುಣವಾಯಿತು'' ಎಂದನು. ಆಗ ಅವನಿಗೆ ದೃಷ್ಟಿ ಬಂದಿತು.
ಅವನು ಯೇಸುವನ್ನು ಆ ದಾರಿಯಲ್ಲಿ ಹಿಂಬಾಲಿಸಿದನು.

### ರಾಜನಂತೆ ಜೆರುಸಲೇಮಿಗೆ ಪ್ರವೇಶ

(ಮತ್ತಾಯ 21:1-11; ಲೂಕ 19:28-40; ಯೋಹಾನ 12:12-19)

11 ಯೇಸು ಮತ್ತು ಆತನ ಶಿಷ್ಯರು ಜೆರುಸಲೇಮಿನ
ಸಮೀಪಕ್ಕೆ ಬಂದಿದ್ದರು. ಅವರು ಆಲಿವ್ ಗುಡ್ಡದ
ಬಳಿಯಿರುವ ಬೆತ್ಫಗೆ ಹಾಗೂ ಬೆಥಾನಿ ಎಂಬ ಊರುಗಳಿಗೆ
ಬಂದಾಗ ಅಲ್ಲಿ ಯೇಸು ತನ್ನ ಇಬ್ಬರು ಶಿಷ್ಯರನ್ನು ಕರೆದು,
2‘‘ಅಲ್ಲಿ ಕಾಣುತ್ತಿರುವ ಊರಿಗೆ ಹೋಗಿರಿ. ನೀವು ಅದನ್ನು
ಪ್ರವೇಶಿಸಿದಾಗ, ಯಾರೂ ಸವಾರಿ ಮಾಡಿಲ್ಲದ ಒಂದು
ಕತ್ತೆಮರಿಯನ್ನು ಅಲ್ಲಿ ಕಟ್ಟಿರುವುದನ್ನು ಕಾಣುವಿರಿ. ಆ
ಕತ್ತೆಯನ್ನು ಬಿಚ್ಚಿಕೊಂಡು, ನನ್ನ ಬಳಿಗೆ ತನ್ನಿರಿ.
3ಯಾವನಾದರೂ ಕತ್ತೆಯನ್ನು ಏಕೆ ತೆಗೆದುಕೊಂಡು ಹೋಗು
ತ್ತಿದ್ದೀರಿ’ ಎಂದು ನಿಮ್ಮನ್ನು ಕೇಳಿದರೆ, ‘ಒಡೆಯನಿಗೆ ಈ ಕತ್ತೆ
ಬೇಕಾಗಿದೆ. ಆತನು ಇದನ್ನು ಬೇಗನೆ ಕಳುಹಿಸಿಕೊಡುವನು’
ಎಂದು ಅವನಿಗೆ ಹೇಳಿರಿ’’ ಎಂದನು.

4ಶಿಷ್ಯರು ಊರಿನೊಳಗೆ ಹೋದಾಗ ರಸ್ತೆಯಲ್ಲಿನ ಒಂದು
ಮನೆಯ ಬಾಗಿಲಿನ ಪಕ್ಕದಲ್ಲಿ ಕಟ್ಟಿಹಾಕಿದ್ದ ಕತ್ತೆಮರಿ
ಯೊಂದನ್ನು ಕಂಡರು. ಶಿಷ್ಯರು ಹೋಗಿ ಆ ಕತ್ತೆಯನ್ನು
ಬಿಚ್ಚಿದಾಗ, 5ಅಲ್ಲಿ ನಿಂತಿದ್ದ ಕೆಲವು ಜನರು, ‘‘ನೀವು ಮಾಡು
ತ್ತಿರುವುದೇನು? ಆ ಕತ್ತೆಯನ್ನು ಏಕೆ ಬಿಚ್ಚುತ್ತಿದ್ದೀರಿ?’’ ಎಂದು
ಕೇಳಿದರು. 6ಯೇಸು ತಮಗೆ ಹೇಳಿದ ರೀತಿಯಲ್ಲಿಯೇ ಶಿಷ್ಯರು
ಉತ್ತರಿಸಿದರು. ಆಗ ಜನರು ಆ ಕತ್ತೆಯನ್ನು ಶಿಷ್ಯರಿಗೆ ಬಿಟ್ಟು
ಕೊಟ್ಟರು. 7ಶಿಷ್ಯರು ಕತ್ತೆಯನ್ನು ಯೇಸುವಿನ ಬಳಿಗೆ ತಂದು
ತಮ್ಮ ಹೊದಿಕೆಗಳನ್ನು ಅದರ ಮೇಲೆ ಹಾಕಿದರು. ಆಗ ಯೇಸು
ಅದರ ಮೇಲೆ ಕುಳಿತನು. 8ಅನೇಕ ಜನರು ಯೇಸುವಿಗಾಗಿ
ರಸ್ತೆಯ ಮೇಲೆ ತಮ್ಮ ಹೊದಿಕೆಗಳನ್ನು ಹಾಸಿದರು. ಬೇರೆ
ಕೆಲವರು ತೋಟಗಳಿಂದ ಎಲೆಗಳನ್ನು ಕೊಯ್ದುತಂದು ರಸ್ತೆಯ
ಮೇಲೆ ಹರಡಿದರು. 9ಕೆಲವು ಜನರು ಯೇಸುವಿನ ಮುಂದೆ
ಹೋಗುತ್ತಿದ್ದರು. ಇತರ ಜನರು ಆತನ ಹಿಂದೆ ಹೋಗುತ್ತಿದ್ದರು.
ಜನರೆಲ್ಲರೂ,

‘‘ಆತನನ್ನು ಕೊಂಡಾಡಿರಿ!* ಪ್ರಭುವಿನ ಹೆಸರಿ
ನಲ್ಲಿ ಬರುವಾತನಿಗೆ ಆಶೀರ್ವಾದವಾಗಲಿ
*ಕೀರ್ತನೆ 118:25,26*

10 ನಮ್ಮ ಪಿತೃವಾದ ದಾವೀದನ ರಾಜ್ಯವು ಬರಲಿ!
ಮೇಲೋಕಗಳಲ್ಲಿ ದೇವರಿಗೆ ಜಯವಾಗಲಿ’’

ಎಂದು ಕೂಗಿದರು.

11ಯೇಸು ಜೆರುಸಲೇಮನ್ನು ತಲುಪಿದಾಗ, ದೇವಾಲಯಕ್ಕೆ
ಹೋಗಿ ಅಲ್ಲಿದ್ದ ಪ್ರತಿಯೊಂದನ್ನೂ ನೋಡಿದನು. ಆದರೆ
ಆಗಲೇ ತಡವಾಗಿತ್ತು. ಆದ್ದರಿಂದ ಯೇಸು ಹನ್ನೆರಡು ಜನ
ಅಪೊಸ್ತಲರೊಂದಿಗೆ ಬೆಥಾನಿಯಕ್ಕೆ ಹೋದನು.

12ಮರುದಿನ, ಯೇಸು ಬೆಥಾನಿಯದಿಂದ ಹೋಗುತ್ತಿರಲು
ಆತನಿಗೆ ಹಸಿವಾಗಿತ್ತು. 13ಆತನು ಎಲೆಗಳಿದ್ದ ಒಂದು
ಅಂಜೂರದ ಮರವನ್ನು ನೋಡಿದನು. ಆದ್ದರಿಂದ ಆ ಮರದಲ್ಲಿ
ಅಂಜೂರದ ಹಣ್ಣೇನಾದರೂ ಸಿಕ್ಕಬಹುದೆಂದು ಅದರ ಬಳಿಗೆ
ಹೋದನು. ಆದರೆ ಆತನು ಆ ಮರದಲ್ಲಿ ಅಂಜೂರದ
ಹಣ್ಣುಗಳನ್ನು ಕಾಣಲಿಲ್ಲ. ಅಲ್ಲಿ ಎಲೆಗಳು ಮಾತ್ರ ಇದ್ದವು.
ಏಕೆಂದರೆ ಅದು ಅಂಜೂರ ಹಣ್ಣಿನ ಕಾಲವಾಗಿರಲಿಲ್ಲ.
14ಆದ್ದರಿಂದ ಯೇಸು ಆ ಮರಕ್ಕೆ, ‘‘ಇನ್ನು ಮೇಲೆ ನಿನ್ನ ಹಣ್ಣನ್ನು
ಯಾರೂ ತಿನ್ನದಂತಾಗಲಿ’’ ಎಂದನು. ಯೇಸುವಿನ ಶಿಷ್ಯರಿಗೂ
ಈ ಮಾತು ಕೇಳಿಸಿತು.

### ದೇವಾಲಯವೇ ಪ್ರಾರ್ಥನಾಲಯ

(ಮತ್ತಾಯ 21:12-17; ಲೂಕ 19:45-48; ಯೋಹಾನ 2:13-22)

15ಯೇಸು ಮತ್ತು ಆತನ ಶಿಷ್ಯರು ಜೆರುಸಲೇಮನ್ನು
ಪ್ರವೇಶಿಸಿದರು. ಅವರು ದೇವಾಲಯದೊಳಗೆ ಬಂದಾಗ ಅಲ್ಲಿ
ವಸ್ತುಗಳನ್ನು ಮಾರುತ್ತಿದ್ದ ಮತ್ತು ಕೊಳ್ಳುತ್ತಿದ್ದ ಜನರನ್ನು ಆತನು
ಅಲ್ಲಿಂದ ಹೊರಡಿಸತೊಡಗಿದನು; ಹಣ ವಿನಿಮಯ ಮಾಡಿ
ಕೊಳ್ಳುತ್ತಿದ್ದ ವ್ಯಾಪಾರಿಗಳ ಮತ್ತು ಪಾರಿವಾಳಗಳನ್ನು ಮಾರು
ತ್ತಿದ್ದವರ ಮೇಜುಗಳನ್ನು ಕೆಡವಿದನು. 16ಹೊರೆ ಹೊತ್ತು
ಕೊಂಡು ದೇವಾಲಯದ ಮೂಲಕ ಹಾದುಹೋಗುತ್ತಿದ್ದ
ವರನ್ನು ಆತನು ತಡೆದನು. 17ನಂತರ ಯೇಸು ಜನರಿಗೆ ಉಪ
ದೇಶಿಸಿ, ‘‘‘ನನ್ನ ಆಲಯವು ಎಲ್ಲಾ ಜನರಿಗೂ ಪ್ರಾರ್ಥನೆಯ
ಆಲಯವೆನಿಸಿಕೊಳ್ಳುವುದು.’* ಎಂದು ಪವಿತ್ರಗ್ರಂಥದಲ್ಲಿ
ಬರೆದಿದೆ. ಆದರೆ ನೀವು ದೇವರ ಆಲಯವನ್ನು ‘ಕಳ್ಳರು
ಅಡಗಿಕೊಳ್ಳುವ ಸ್ಥಳವನ್ನಾಗಿ ಮಾಡಿದ್ದೀರಿ’* ಎಂದು
ಹೇಳಿದನು.

18ಮಹಾಯಾಜಕರು ಹಾಗೂ ಧರ್ಮೋಪದೇಶಕರು ಈ
ಸಂಗತಿಗಳನ್ನು ಕೇಳಿ ಯೇಸುವನ್ನು ಕೊಲ್ಲಿಸಲು ತಕ್ಕ ಮಾರ್ಗ
ವನ್ನು ಕಂಡುಹಿಡಿಯಲು ಪ್ರಯತ್ನಿಸತೊಡಗಿದರು. ಜನ
ರೆಲ್ಲರೂ ಯೇಸುವಿನ ಉಪದೇಶವನ್ನು ಕೇಳಿ ಅತ್ಯಾಶ್ಚರ್ಯ
ಪಟ್ಟಿದ್ದರಿಂದ ಅವರು ಯೇಸುವಿಗೆ ಭಯಪಟ್ಟರು. 19ಆ ರಾತ್ರಿ
ಯೇಸು ಮತ್ತು ಆತನ ಶಿಷ್ಯರು ಪಟ್ಟಣವನ್ನು ಬಿಟ್ಟು ಹೋದರು.

### ನಂಬಿಕೆಯ ಶಕ್ತಿ

(ಮತ್ತಾಯ 21:20-22)

20ಮರುದಿನ ಬೆಳಿಗ್ಗೆ, ಯೇಸು ತನ್ನ ಶಿಷ್ಯರೊಂದಿಗೆ
ಹೋಗುತ್ತಿದ್ದನು. ಹಿಂದಿನ ದಿನ ಯೇಸು ಶಪಿಸಿದ ಅಂಜೂರದ
ಮರವನ್ನು ಶಿಷ್ಯರು ನೋಡಿದರು. ಅಂಜೂರದ ಮರವು ಬೇರು
ಸಹಿತ ಒಣಗಿಹೋಗಿತ್ತು. 21ಪೇತ್ರನು ಆ ಮರವನ್ನು ಜ್ಞಾಪಿಸಿ
ಕೊಂಡು, ಯೇಸುವಿಗೆ, ‘‘ಗುರುವೇ, ನೋಡು! ನಿನ್ನೆ ನೀನು
ಶಪಿಸಿದ ಅಂಜೂರದ ಮರ ಒಣಗಿಹೋಗಿದೆ!’’ ಎಂದನು.

22ಯೇಸು, ‘‘ದೇವರಲ್ಲಿ ನಂಬಿಕೆ ಇಡಿರಿ. 23ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ನೀವು ಈ ಬೆಟ್ಟಕ್ಕೆ, ‘ನೀನು ಹೋಗಿ
ಸಮುದ್ರದೊಳಗೆ ಬೀಳು’ ಎಂದು ಹೇಳಿ, ಸಂಶಯವನ್ನೇಪಡದೆ,
ನೀವು ಹೇಳಿದ್ದು ಖಂಡಿತವಾಗಿ ನೆರವೇರುತ್ತದೆ ಎಂದು
ನಂಬಿದರೆ, ದೇವರು ಅದನ್ನು ನಿಮಗಾಗಿ ಮಾಡುತ್ತಾನೆ. 24ಆದ್ದ
ರಿಂದ ನೀವು ಪ್ರಾರ್ಥನೆಯಲ್ಲಿ ಬೇಡಿಕೊಂಡು, ಅದನ್ನೆಲ್ಲಾ

---

**ಕೊಂಡಾಡಿರಿ** ಮೂಲ ಗ್ರಂಥದಲ್ಲಿ ಹೊಸನ್ನ ಎಂಬ ಹೀಬ್ರೂ ಪದವನ್ನು ಬಳಸಲಾಗಿದೆ. ಈ ಪದದ ಅರ್ಥ ‘‘ರಕ್ಷಿಸು.’’ ಇದನ್ನು ‘‘ಕೊಂಡಾಡಿರಿ’’ ಎಂಬರ್ಥದಲ್ಲಿ ಬಳಸಲಾಗುತ್ತಿತ್ತು.

**ನನ್ನ ... ಆಲಯವೆನಿಸಿಕೊಳ್ಳುವುದು** ಯೆಶಾಯ 56:7.

**ಕಳ್ಳರು ... ಮಾಡಿದ್ದೀರಿ** ಯೆರೆಮೀಯ 7:11.

ಹೊಂದಿಕೊಂಡಾಯಿತೆಂದು ನಂಬಿದರೆ, ಆದೆಲ್ಲಾ ನಿಮ್ಮದಾಗುತ್ತವೆ ಎಂದು ನಾನು ನಿಮಗೆ ಹೇಳುತ್ತೇನೆ. 25ನೀವು ಪ್ರಾರ್ಥಿಸಲು ಸಿದ್ಧರಾಗಿರುವಾಗ, ನೀವು ಇನ್ನೊಬ್ಬನ ವಿಷಯದಲ್ಲಿ ಯಾವುದೇ ಕಾರಣದಿಂದಾಗಲಿ ಕೋಪದಿಂದಿರುವುದು ನಿಮ್ಮ ನೆನಪಿಗೆ ಬಂದರೆ, ಅವನನ್ನು ಕ್ಷಮಿಸಿಬಿಡಿ. ಆಗ ಪರಲೋಕದಲ್ಲಿರುವ ನಿಮ್ಮ ತಂದೆಯೂ ನಿಮ್ಮ ಪಾಪಗಳನ್ನು ಕ್ಷಮಿಸುವನು’’ ಎಂದು ಉತ್ತರಿಸಿದನು. 26*

### ಯೇಸುವಿನ ಅಧಿಕಾರವನ್ನು ಕುರಿತು ಯೆಹೂದ್ಯ ನಾಯಕರ ಸಂಶಯ

(ಮತ್ತಾಯ 21:23-27; ಲೂಕ 20:1-8)

27ಯೇಸು ಮತ್ತು ಆತನ ಶಿಷ್ಯರು ಜೆರುಸಲೇಮಿಗೆ ಮತ್ತೆ ಹೋದರು. ಯೇಸು ದೇವಾಲಯದಲ್ಲಿ ತಿರುಗಾಡುತ್ತಿದ್ದಾಗ, ಮಹಾಯಾಜಕರು, ಧರ್ಮೋಪದೇಶಕರು ಮತ್ತು ಹಿರಿಯ ಯೆಹೂದ್ಯನಾಯಕರು ಆತನ ಬಳಿಗೆ ಬಂದು, 28‘‘ಇವುಗಳನ್ನೆಲ್ಲ ಮಾಡಲು ನಿನಗೆ ಯಾವ ಅಧಿಕಾರವಿದೆ? ಈ ಅಧಿಕಾರವನ್ನು ನಿನಗೆ ಯಾರು ಕೊಟ್ಟರು? ನಮಗೆ ತಿಳಿಸು!’’ ಎಂದರು.

29ಯೇಸು, ‘‘ನಾನೂ ನಿಮಗೊಂದು ಪ್ರಶ್ನೆಯನ್ನು ಕೇಳುತ್ತೇನೆ. ನೀವು ನನ್ನ ಪ್ರಶ್ನೆಗೆ ಉತ್ತರಿಸಿದರೆ ನಾನು ಯಾವ ಅಧಿಕಾರದಿಂದ ಇದನ್ನೆಲ್ಲಾ ಮಾಡುತ್ತಿದ್ದೇನೆ ಎಂಬುದನ್ನು ನಿಮಗೆ ತಿಳಿಸುತ್ತೇನೆ. 30ಯೋಹಾನನು ಜನರಿಗೆ ದೀಕ್ಷಾಸ್ನಾನ ಮಾಡಿಸಿದ್ದು ದೇವರಿಂದ ಬಂದ ಅಧಿಕಾರದಿಂದಲೇ ಅಥವಾ ಮನುಷ್ಯರಿಂದ ಬಂದ ಅಧಿಕಾರದಿಂದಲೇ? ನನಗೆ ತಿಳಿಸಿ!’’ ಎಂದನು.

31ಯೆಹೂದ್ಯನಾಯಕರು ಈ ಪ್ರಶ್ನೆಯ ಬಗ್ಗೆ ಚರ್ಚಿಸಿ ಒಬ್ಬರಿಗೊಬ್ಬರು, ‘‘‘ಯೋಹಾನನು ದೀಕ್ಷಾಸ್ನಾನ ಕೊಟ್ಟದ್ದು ದೇವರಿಂದ ಬಂದ ಅಧಿಕಾರದಿಂದ’ ಎಂದು ನಾವು ಉತ್ತರಿಸಿದರೆ, ಆಗ ‘ಮತ್ತೆ ನೀವು ಏಕೆ ಯೋಹಾನನನ್ನು ನಂಬಲಿಲ್ಲ?’ ಎಂದು ಯೇಸು ಕೇಳುತ್ತಾನೆ. 32ಆದರೆ ‘ಯೋಹಾನನು ದೀಕ್ಷಾಸ್ನಾನ ಮಾಡಿಸಿದ್ದು ಮನುಷ್ಯನಿಂದ ಬಂದ ಅಧಿಕಾರದಿಂದ’ ಎಂದು ಹೇಳಿದರೆ, ಆಗ ಜನರು ನಮ್ಮ ಮೇಲೆ ಕೋಪಗೊಳ್ಳುತ್ತಾರೆ’’ ಎಂದು ಮಾತಾಡಿಕೊಂಡರು. ಜನರೆಲ್ಲರೂ ಯೋಹಾನನನ್ನು ಒಬ್ಬ ಪ್ರವಾದಿಯೆಂದು ನಂಬಿದ್ದರಿಂದ ಅವರು ಜನರಿಗೆ ಭಯಪಟ್ಟರು.

33ಆದಕಾರಣ ಅವರು ಯೇಸುವಿಗೆ, ‘‘ನಮಗೆ ಗೊತ್ತಿಲ್ಲ’’ ಎಂದು ಉತ್ತರಿಸಿದರು.

ಯೇಸು ಅವರಿಗೆ, ‘‘ಹಾಗಾದರೆ ನಾನು ಸಹ ಯಾವ ಅಧಿಕಾರದಿಂದ ಇವುಗಳನ್ನು ಮಾಡುತ್ತಿದ್ದೇನೆಂದು ನಿಮಗೆ ಹೇಳುವುದಿಲ್ಲ’’ ಅಂದನು.

### ದೇವರ ಮಗನ ಆಗಮನ

(ಮತ್ತಾಯ 21:33-46; ಲೂಕ 20:9-19)

12 ಯೇಸು ಜನರಿಗೆ ಸಾಮ್ಯಗಳ ಮೂಲಕ ಉಪದೇಶಿಸುತ್ತಾ ಅವರಿಗೆ ಹೇಳಿದ್ದೇನೆಂದರೆ: ‘‘ಒಬ್ಬನು ದ್ರಾಕ್ಷಿಯ ತೋಟವನ್ನು ಮಾಡಿ, ಸುತ್ತಲೂ ಗೋಡೆ ಹಾಕಿಸಿ, ದ್ರಾಕ್ಷಾರಸವನ್ನು ತೆಗೆಯಲು ಅಲೆಯನ್ನು ಹೂಡಿಸಿ, ಕಾವಲಿಗಾಗಿ ಅಟ್ಟಣೆಯನ್ನು ಕಟ್ಟಿಸಿದನು. ಅವನು ಕೆಲವು ರೈತರಿಗೆ ತೋಟವನ್ನು ಗುತ್ತಿಗೆಗೆ ಕೊಟ್ಟು ಪ್ರವಾಸಕ್ಕೆ ಹೊರಟನು. 2ತರುವಾಯ ಫಲ ಕಾಲವು ಬಂದಾಗ ತನ್ನ ಪಾಲಿನ ದ್ರಾಕ್ಷಿಯನ್ನು ತರುವುದಕ್ಕಾಗಿ ಒಬ್ಬ ಸೇವಕನನ್ನು ಕಳುಹಿಸಿದನು. 3ಆದರೆ ರೈತರು ಆ ಸೇವಕನನ್ನು ಹಿಡಿದುಕೊಂಡು ಹೊಡೆದು ಏನನ್ನೂ ಕೊಡದೆ ಅವನನ್ನು ಕಳುಹಿಸಿಬಿಟ್ಟರು. 4ಆಗ ಯಜಮಾನನು ಮತ್ತೊಬ್ಬ ಸೇವಕನನ್ನು ರೈತರ ಬಳಿಗೆ ಕಳುಹಿಸಿದನು. ರೈತರು ಅವನಿಗೂ ತಲೆಯ ಮೇಲೆ ಹೊಡೆದು ಅವಮಾನ ಮಾಡಿದರು. 5ಆದ್ದರಿಂದ ಯಜಮಾನನು ಮತ್ತೊಬ್ಬ ಸೇವಕನನ್ನು ಕಳುಹಿಸಿದನು. ರೈತರು ಈ ಸೇವಕನನ್ನು ಕೊಂದುಹಾಕಿದರು. ಆ ಯಜಮಾನನು ಇತರ ಅನೇಕ ಸೇವಕರನ್ನು ರೈತರ ಬಳಿಗೆ ಕಳುಹಿಸಿದನು. ರೈತರು ಕೆಲವು ಸೇವಕರನ್ನು ಹೊಡೆದರು, ಕೆಲವರನ್ನು ಕೊಂದುಹಾಕಿದರು.

6‘‘ಆ ಯಜಮಾನನಿಗೆ ರೈತರ ಬಳಿಗೆ ಕಳುಹಿಸಲು ಪ್ರಿಯ ಮಗನೊಬ್ಬನೇ ಉಳಿದಿದ್ದನು. ಅವನು ಕಳುಹಿಸಬಹುದಾದ ಕೊನೆಯ ವ್ಯಕ್ತಿ ಅವನ ಸ್ವಂತ ಮಗನಾಗಿದ್ದನು. ‘ರೈತರು ನನ್ನ ಮಗನಿಗೆ ಗೌರವ ಕೊಡುತ್ತಾರೆ’ ಎಂದುಕೊಂಡು ಯಜಮಾನನು ಅವನನ್ನೇ ಕಳುಹಿಸಿದನು.

7‘‘ಆದರೆ ರೈತರು ಒಬ್ಬರಿಗೊಬ್ಬರು, ‘ಇವನು ಯಜಮಾನನ ಮಗನು. ಈ ದ್ರಾಕ್ಷಿಯ ತೋಟದ ಹಕ್ಕುದಾರ. ನಾವು ಇವನನ್ನು ಕೊಂದರೆ, ದ್ರಾಕ್ಷಿ ತೋಟ ನಮ್ಮದಾಗುತ್ತದೆ’ ಎಂದುಕೊಂಡು, 8ಮಗನನ್ನು ಹಿಡಿದು ಕೊಂದುಹಾಕಿ, ದ್ರಾಕ್ಷಿ ತೋಟದ ಹೊರಗೆ ಎಸೆದು ಬಿಟ್ಟರು.

9‘‘ಹೀಗಿರುವಾಗ ಆ ದ್ರಾಕ್ಷಿ ತೋಟದ ಯಜಮಾನನು ಏನು ಮಾಡುತ್ತಾನೆ? ಅವನು ತೋಟಕ್ಕೆ ಹೋಗಿ, ಆ ರೈತರನ್ನು ಕೊಂದು ತೋಟವನ್ನು ಬೇರೆ ರೈತರಿಗೆ ಒಪ್ಪಿಸಿಕೊಡುತ್ತಾನೆ. 10ಪವಿತ್ರ ಗ್ರಂಥದಲ್ಲಿ ಬರೆದಿರುವಂತೆ,

> ‘ಮನೆ ಕಟ್ಟುವವರು ತಿರಸ್ಕರಿಸಿದ ಕಲ್ಲೇ ಮುಖ್ಯವಾದ ಮೂಲೆಗಲ್ಲಾಯಿತು.
> 11 ಇದು ಪ್ರಭುವಿನಿಂದ ಆಯಿತು. ಇದು ನಮಗೆ ಆಶ್ಚರ್ಯವಾಗಿ ತೋರುತ್ತದೆ.’’
>
> ಕೀರ್ತನೆ *118:22-23*

12ಯೇಸು ಹೇಳಿದ ಈ ಸಾಮ್ಯವನ್ನು ಯೆಹೂದ್ಯನಾಯಕರು ಕೇಳಿ ತಮ್ಮನ್ನು ಕುರಿತಾಗಿಯೇ ಇದನ್ನು ಹೇಳಿದನೆಂದು ತಿಳಿದುಕೊಂಡು ಯೇಸುವನ್ನು ಬಂಧಿಸಲು ಪ್ರಯತ್ನಿಸಿದರೂ ಜನರಿಗೆ ಹೆದರಿಕೊಂಡು ಆತನನ್ನು ಬಿಟ್ಟುಹೋದರು.

### ಯೇಸುವನ್ನು ವಂಚಿಸಲು ಯೆಹೂದ್ಯನಾಯಕರ ಪ್ರಯತ್ನ

(ಮತ್ತಾಯ 22:15-22; ಲೂಕ 20:20-26)

13ಅನಂತರ ಯೆಹೂದ್ಯನಾಯಕರು ಕೆಲವು ಫರಿಸಾಯರನ್ನು ಹಾಗೂ ಹೆರೋದ್ಯರ ಗುಂಪಿನಿಂದ ಕೆಲವರನ್ನು ಯೇಸುವಿನ ಮಾತಿನಲ್ಲಿ ಏನಾದರೂ ತಪ್ಪು ಕಂಡುಹಿಡಿಯಲು ಕಳುಹಿಸಿದರು. 14ಫರಿಸಾಯರು ಮತ್ತು ಹೆರೋದ್ಯರು ಯೇಸುವಿನ ಬಳಿಗೆ ಬಂದು, ಆತನಿಗೆ, ‘‘ಉಪದೇಶಕನೇ, ನೀನು

---

**ವಚನ 26** ‘‘ನೀವು ಇತರ ಜನರನ್ನು ಕ್ಷಮಿಸದಿದ್ದರೆ, ಪರಲೋಕದಲ್ಲಿರುವ ನಿಮ್ಮ ತಂದೆಯೂ ನಿಮ್ಮ ಪಾಪಗಳನ್ನು ಕ್ಷಮಿಸುವುದಿಲ್ಲ’’ ಎಂದು ಕೆಲವು ಗ್ರೀಕ್ ಪ್ರತಿಗಳಲ್ಲಿ ಸೇರಿಸಿದ್ದಾರೆ.

ಯಥಾರ್ಥನೆಂಬುದು ನಮಗೆ ತಿಳಿದಿದೆ. ನಿನ್ನ ಬಗ್ಗೆ ಜನರು ಏನು
ಯೋಚಿಸುತ್ತಾರೆಂಬುದರ ಬಗ್ಗೆ ನಿನಗೆ ಹೆದರಿಕೆಯಿಲ್ಲ.
ಜನರೆಲ್ಲರೂ ನಿನಗೆ ಒಂದೇ. ಮತ್ತು ನೀನು ದೇವರ ಮಾರ್ಗ
ವನ್ನು ಕುರಿತು ಸತ್ಯವನ್ನೇ ಉಪದೇಶಿಸುತ್ತಿರುವೆ ಎಂದು ನಮಗೆ
ಗೊತ್ತಿದೆ. ಆದ್ದರಿಂದ ನಮಗೆ ಹೇಳು: ಸೀಸರನಿಗೆ ತೆರಿಗೆ
ಕೊಡುವುದು ಸರಿಯೋ? ಅಥವಾ ತಪ್ಪೋ? ನಾವು ತೆರಿಗೆ
ಗಳನ್ನು ಕೊಡಬೇಕೇ ಅಥವಾ ಕೊಡಬಾರದೇ?'' ಎಂದರು.
15ಈ ಜನರು ನಿಜವಾಗಿಯೂ ತನ್ನನ್ನು ವಂಚಿಸುವುದಕ್ಕೆ
ಪ್ರಯತ್ನಿಸುತ್ತಿದ್ದಾರೆಂಬುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ
ಆತನು ಅವರಿಗೆ, ''ನನ್ನ ಮಾತಿನಲ್ಲಿ ತಪ್ಪನ್ನು ಕಂಡುಹಿಡಿಯಲು
ಏಕೆ ಪ್ರಯತ್ನಿಸುತ್ತೀರಿ? ನನಗೆ ಒಂದು ಬೆಳ್ಳಿ ನಾಣ್ಯವನ್ನು*
ಕೊಡಿರಿ, ನಾನು ಅದನ್ನು ನೋಡಬೇಕು'' ಎಂದನು. 16ಅವರು
ಆತನಿಗೆ ಒಂದು ನಾಣ್ಯವನ್ನು ಕೊಟ್ಟರು. ಯೇಸು ಅವರಿಗೆ,
''ನಾಣ್ಯದ ಮೇಲೆ ಯಾರ ಚಿತ್ರವಿದೆ? ಮತ್ತು ಅದರ ಮೇಲೆ
ಯಾರ ಹೆಸರಿದೆ?'' ಎಂದು ಕೇಳಿದನು. ಅವರು, ''ಇದು
ಸೀಸರನ ಚಿತ್ರ ಮತ್ತು ಸೀಸರನ ಹೆಸರು'' ಎಂದು ಉತ್ತರಿಸಿದರು.
17ಆಗ ಯೇಸು ಅವರಿಗೆ, ''ಸೀಸರನದನ್ನು ಸೀಸರನಿಗೆ
ಕೊಡಿ. ದೇವರದನ್ನು ದೇವರಿಗೆ ಕೊಡಿ'' ಎಂದು ಹೇಳಿದನು.
ಯೇಸು ಹೇಳಿದ್ದನ್ನು ಕೇಳಿ ಅವರು ಅತ್ಯಾಶ್ಚರ್ಯಪಟ್ಟರು.

### ಯೇಸುವನ್ನು ವಂಚಿಸಲು ಸದ್ದುಕಾಯರ ಪ್ರಯತ್ನ

(ಮತ್ತಾಯ 22:23-33; ಲೂಕ 20:27-40)

18ನಂತರ ಸದ್ದುಕಾಯರಲ್ಲಿ (ಸದ್ದುಕಾಯರು ಪುನರುತ್ಥಾನ
ವಿಲ್ಲವೆಂದು ನಂಬುತ್ತಾರೆ.) ಕೆಲವರು ಯೇಸುವಿನ ಬಳಿಗೆ
ಬಂದು, 19''ಉಪದೇಶಕನೇ, ವಿವಾಹಿತನೊಬ್ಬನು ಮಕ್ಕಳಿಲ್ಲದೆ
ಸತ್ತರೆ, ಅವನ ಹೆಂಡತಿಯನ್ನು ಅವನ ಸಹೋದರನು ಮದುವೆ
ಮಾಡಿಕೊಂಡು ಸತ್ತುಹೋದ ಸಹೋದರನಿಗಾಗಿ ಸಂತಾನ
ಪಡೆಯಬೇಕೆಂದು ಮೋಶೆಯು ಬರೆದಿದ್ದಾನೆ. 20ಏಳು ಜನ
ಸಹೋದರರಿದ್ದರು. ಮೊದಲನೆಯ ಸಹೋದರನು ಮದುವೆ
ಮಾಡಿಕೊಂಡು ಮಕ್ಕಳಿಲ್ಲದೆ ಸತ್ತುಹೋದನು. 21ಆದ್ದರಿಂದ
ಎರಡನೆಯ ಸಹೋದರನು ಆಕೆಯನ್ನು ಮದುವೆಯಾದನು.
ಆದರೆ ಅವನೂ ಮಕ್ಕಳಿಲ್ಲದೆ ಸತ್ತುಹೋದನು. ಮೂರನೆಯ
ಸಹೋದರನಿಗೂ ಹೀಗೆಯೇ ಆಯಿತು. 22ಏಳು ಮಂದಿ
ಸಹೋದರರೂ ಆಕೆಯನ್ನು ಮದುವೆಯಾಗಿ ಆಕೆಯಲ್ಲಿ
ಮಕ್ಕಳಿಲ್ಲದೆ ಸತ್ತುಹೋದರು. ಕೊನೆಗೆ ಆಕೆಯೂ ಸತ್ತು
ಹೋದಳು. 23ಹೀಗಿರಲು ಜನರು ಪುನರುತ್ಥಾನ ಹೊಂದಿದಾಗ
ಆಕೆಯು ಯಾರ ಹೆಂಡತಿಯಾಗುವಳು?'' ಎಂದರು.
24ಯೇಸು, ''ನೀವು ಇಂಥಾ ತಪ್ಪನ್ನು ಮಾಡುವುದೇಕೆ?
ಪವಿತ್ರ ಗ್ರಂಥವಾಗಲಿ, ದೇವರ ಶಕ್ತಿಯಾಗಲಿ ನಿಮಗೆ ಗೊತ್ತಿಲ್ಲ.
25ಸತ್ತಜನರು ಪುನರುತ್ಥಾನ ಹೊಂದಿದಾಗ ಸ್ತ್ರೀಯರು ಮತ್ತು
ಪುರುಷರು ಮದುವೆ ಮಾಡಿಕೊಳ್ಳುವುದೂ ಇಲ್ಲ. ತಮ್ಮ
ಮಕ್ಕಳಿಗೂ ಮದುವೆ ಮಾಡಿಸುವುದೂ ಇಲ್ಲ. ಅವರೆಲ್ಲರೂ
ಪರಲೋಕದಲ್ಲಿರುವ ದೇವದೂತರಂತಿರುತ್ತಾರೆ. 26ಸತ್ತಜನರ
ಪುನರುತ್ಥಾನದ ಬಗ್ಗೆ ದೇವರು ಹೇಳಿರುವುದನ್ನು ನೀವು
ಖಂಡಿತವಾಗಿ ಓದಿದ್ದೀರಿ. ದೇವರು ಮೋಶೆಗೆ, 'ನಾನೇ
ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು
ಯಾಕೋಬನ ದೇವರು'* ಎಂದು ಹೇಳಿದ್ದನ್ನು ಮೋಶೆಯ
ಪುಸ್ತಕದಲ್ಲಿರುವ ಉರಿಯುವ ಪೊದೆಯ ಅಧ್ಯಾಯದಲ್ಲಿ
ಕಾಣಬಹುದು. 27ದೇವರು ತನ್ನನ್ನು ಅಬ್ರಹಾಮನ ಇಸಾಕನ
ಯಾಕೋಬನ ದೇವರು ಎಂದು ಹೇಳಿಕೊಂಡಿರುವುದರಿಂದ
ಇವರು ನಿಜವಾಗಿಯೂ ಸತ್ತಿಲ್ಲ. ಏಕೆಂದರೆ, ದೇವರು
ಜೀವಿತರಿಗೆ ದೇವರಾಗಿದ್ದಾನೆಯೇ ಹೊರತು ಸತ್ತವರಿಗೆ ಅಲ್ಲ.*
ಸದ್ದುಕಾಯರಾದ ನೀವು ತಪ್ಪಾಗಿ ತಿಳಿದುಕೊಂಡಿದ್ದೀರಿ!''
ಎಂದು ಉತ್ತರಿಸಿದನು.

### ಅತ್ಯಂತ ಮುಖ್ಯ ಆಜ್ಞೆ ಯಾವುದು?

(ಮತ್ತಾಯ 22:34-40; ಲೂಕ 10:25-28)

28ಈ ವಾದ ವಿವಾದವನ್ನು ಕೇಳುತ್ತಿದ್ದ ಧರ್ಮೋಪ
ದೇಶಕರಲ್ಲಿ ಒಬ್ಬನು ಯೇಸು ಸದ್ದುಕಾಯರಿಗೆ ಹಾಗೂ
ಫರಿಸಾಯರಿಗೆ ಒಳ್ಳೆಯ ಉತ್ತರ ಕೊಟ್ಟದ್ದನ್ನು ಗಮನಿಸಿ, ಆತನ
ಬಳಿಗೆ ಬಂದು, ''ಆಜ್ಞೆಗಳಲ್ಲೆಲ್ಲಾ ಅತ್ಯಂತ ಮುಖ್ಯವಾದ ಆಜ್ಞೆ
ಯಾವುದು?'' ಎಂದು ಕೇಳಿದನು.
29ಅದಕ್ಕೆ ಯೇಸು, ''ಇಸ್ರೇಲಿನ ಜನರೇ ಕೇಳಿರಿ, 'ನಮ್ಮ
ದೇವರಾದ ಪ್ರಭುವೊಬ್ಬನೇ ದೇವರು. 30ನಿಮ್ಮ ದೇವರಾದ
ಪ್ರಭುವನ್ನು ನೀವು ಪೂರ್ಣಹೃದಯದಿಂದಲೂ ಪೂರ್ಣಪ್ರಾಣ
ದಿಂದಲೂ ಪೂರ್ಣಬುದ್ಧಿಯಿಂದಲೂ ಪೂರ್ಣಶಕ್ತಿ
ಯಿಂದಲೂ ಪ್ರೀತಿಸಬೇಕು.'* ಇದೇ ಅತ್ಯಂತ ಮುಖ್ಯವಾದ
ಆಜ್ಞೆ. 31'ನೀನು ನಿನ್ನನ್ನು ಪ್ರೀತಿಸುವಂತೆ ನಿನ್ನ ನೆರೆಯವರನ್ನು
ಪ್ರೀತಿಸಬೇಕು' ಎಂಬುದೇ ಅತ್ಯಂತ ಮುಖ್ಯವಾದ ಎರಡನೇ
ಆಜ್ಞೆ. ಇವುಗಳೇ ಅತ್ಯಂತ ಮುಖ್ಯವಾದವು'' ಎಂದು ಹೇಳಿದನು.
32ಆಗ ಅವನು, ''ಉಪದೇಶಕನೇ, ಅದು ಒಳ್ಳೆಯ ಉತ್ತರ.
ನೀನು ಸರಿಯಾಗಿ ಹೇಳಿದೆ. ದೇವರೊಬ್ಬನೇ ಪ್ರಭು.
33ಆತನಲ್ಲದೆ ಬೇರೆ ದೇವರಿಲ್ಲ. ದೇವರನ್ನು ಪೂರ್ಣಹೃದಯ
ದಿಂದ, ಪೂರ್ಣಬುದ್ಧಿಯಿಂದ ಹಾಗೂ ಪೂರ್ಣಶಕ್ತಿಯಿಂದ
ಪ್ರೀತಿಸಬೇಕು. ಮತ್ತು ಒಬ್ಬ ವ್ಯಕ್ತಿಯು ತನ್ನನ್ನು ಪ್ರೀತಿಸು
ವಂತೆಯೇ ಇತರರನ್ನೂ ಪ್ರೀತಿಸಬೇಕು.* ನಾವು ದೇವರಿಗೆ
ಅರ್ಪಿಸುವ ಪಶುಯಜ್ಞಗಳಿಗಿಂತಲೂ ಈ ಆಜ್ಞೆಗಳು ಹೆಚ್ಚು
ಮುಖ್ಯವಾಗಿವೆ'' ಎಂದು ಉತ್ತರಿಸಿದನು.
34 ಅವನ ಬುದ್ಧಿವಂತಿಕೆಯ ಉತ್ತರವನ್ನು ಕೇಳಿದ ಯೇಸು,
''ನೀನು ದೇವರ ರಾಜ್ಯಕ್ಕೆ ಹತ್ತಿರವಾಗಿರುವೆ'' ಎಂದನು.
ಅಂದಿನಿಂದ, ಯೇಸುವಿಗೆ ಹೆಚ್ಚು ಪ್ರಶ್ನೆಗಳನ್ನು ಕೇಳಲು
ಯಾರಿಗೂ ಸಾಕಷ್ಟು ಧೈರ್ಯ ಬರಲಿಲ್ಲ.
35ಯೇಸು ದೇವಾಲಯದಲ್ಲಿ ಉಪದೇಶಿಸುತ್ತಿದ್ದಾಗ
ಆತನು ಅವರಿಗೆ, ''ಕ್ರಿಸ್ತನು ದಾವೀದನ ಮಗನೆಂದು ಧರ್ಮೋಪ
ದೇಶಕರು ಹೇಳುವುದೇಕೆ?

---

**ಬೆಳ್ಳಿ ನಾಣ್ಯ** ಮೂಲಭಾಷೆಯಲ್ಲಿ ದಿನಾರಿ. ರೋಮಾ ಸಾಮ್ರಾಜ್ಯದ ಬೆಳ್ಳಿ ನಾಣ್ಯ.

**ನಾನೇ ... ದೇವರು** ವಿಮೋಚನ 3:6.

**ದೇವರು .. ಅಲ್ಲ** ಇಲ್ಲಿ ಇದರರ್ಥ: ಅಬ್ರಹಾಮ, ಇಸಾಕ, ಯಾಕೋಬ ಇನ್ನೂ ಜೀವಂತವಾಗಿದ್ದಾರೆ.

**ನಮ್ಮ ... ಪ್ರೀತಿಸಬೇಕು** ಧರ್ಮೋಪದೇಶ 6:4-5.

**ನೀನು ... ಪ್ರೀತಿಸಬೇಕು** ಯಾಜಕ 19:18.

36 ‘ಪ್ರಭುವು ನನ್ನ ಪ್ರಭುವಿಗೆ, ನಾನು ನಿನ್ನ ವಿರೋಧಿ
ಗಳನ್ನು ನಿನಗೆ ಪಾದಪೀಠವನ್ನಾಗಿ ಮಾಡುವ ತನಕ
ನನ್ನ ಬಲಗಡೆಯಲ್ಲಿ ನನ್ನೊಂದಿಗೆ ಕುಳಿತು
ಕೊಂಡಿರು’ *ಕೀರ್ತನೆ 110:1*

ಎಂದು ಹೇಳಿದ್ದಾನೆ ಎಂಬುದಾಗಿ ದಾವೀದನೇ ಪವಿತ್ರಾತ್ಮ ಪ್ರೇರಣೆಯಿಂದ ಬರೆದಿದ್ದಾನಲ್ಲಾ! 37“ದಾವೀದನೇ ಕ್ರಿಸ್ತನನ್ನು ‘ಪ್ರಭು’ ಎಂದು ಕರೆದಿರುವಾಗ ಕ್ರಿಸ್ತನು ದಾವೀದನ ಮಗನಾಗುವುದು ಹೇಗೆ ಸಾಧ್ಯ?” ಎಂದು ಪ್ರಶ್ನಿಸಿದನು. ಯೇಸುವಿನ ಮಾತನ್ನು ಕೇಳಿ, ಅನೇಕ ಜನರು ಬಹಳ ಸಂತೋಷಪಟ್ಟರು.

38ಯೇಸು ತನ್ನ ಉಪದೇಶವನ್ನು ಮುಂದುವರಿಸಿ, “ಧರ್ಮೋಪದೇಶಕರ ಬಗ್ಗೆ ಎಚ್ಚರಿಕೆಯಿಂದಿರಿ! ಅವರು ನಿಲುವಂಗಿಗಳನ್ನು ಧರಿಸಿಕೊಂಡು ತಿರುಗಾಡುತ್ತಾರೆ. ಅವರು ಪೇಟೆಬೀದಿಗಳಲ್ಲಿ ಜನರಿಂದ ಗೌರವ ಪಡೆಯಲು ಅಪೇಕ್ಷಿಸುತ್ತಾರೆ. 39ಸಭಾಮಂದಿರಗಳಲ್ಲಿ ಮತ್ತು ಔತಣಗಳಲ್ಲಿ ಉನ್ನತ ಆಸನಗಳನ್ನು ಬಯಸುತ್ತಾರೆ. 40ಅವರು ವಿಧವೆಯರ ಆಸ್ತಿಯನ್ನು ಕಸಿದುಕೊಳ್ಳುತ್ತಾರೆ. ಉದ್ದುದ್ದ ಪ್ರಾರ್ಥನೆಗಳನ್ನು ಮಾಡುವುದರ ಮೂಲಕ ತಮ್ಮನ್ನು ತಾವೇ ಒಳ್ಳೆಯವರೆಂದು ತೋರಿಸಿಕೊಳ್ಳಲು ಪ್ರಯತ್ನಿಸುತ್ತಾರೆ. ದೇವರು ಈ ಜನರನ್ನು ಕಠಿಣವಾಗಿ ಶಿಕ್ಷಿಸುತ್ತಾನೆ” ಎಂದು ಹೇಳಿದನು.

## ಬಡವಿಧವೆಯ ಕಾಣಿಕೆ

(ಲೂಕ 21:1-4)

41ಯೇಸು ದೇವಾಲಯದಲ್ಲಿ ಕಾಣಿಕೆ ಪೆಟ್ಟಿಗೆಗಳ ಎದುರಿನಲ್ಲಿ ಕುಳಿತಿದ್ದಾಗ, ಜನರು ಪೆಟ್ಟಿಗೆಯಲ್ಲಿ ಹಣ ಹಾಕುವುದನ್ನು ಗಮನಿಸಿದನು. ಅನೇಕ ಶ್ರೀಮಂತ ಜನರು ಹೆಚ್ಚು ಹಣವನ್ನು ಕೊಟ್ಟರು. 42ನಂತರ ಒಬ್ಬ ಬಡವಿಧವೆ ಬಂದು, ಎರಡು ತಾಮ್ರದ ನಾಣ್ಯಗಳನ್ನು* ಅಂದರೆ ಒಂದು ಪೈಸೆಯನ್ನು ಹಾಕಿದಳು.

43ಯೇಸು ತನ್ನ ಶಿಷ್ಯರನ್ನು ಬಳಿಗೆ ಕರೆದು, “ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಕಾಣಿಕೆ ಹಾಕಿದವರೆಲ್ಲರಲ್ಲಿ ಈ ಬಡ ವಿಧವೆ ಹೆಚ್ಚು ಹಾಕಿದ್ದಾಳೆ. 44ಉಳಿದವರಾದರೊ ತಮಗೆ ಸಾಕಾಗಿ ಉಳಿದದ್ದರಲ್ಲಿ ಸ್ವಲ್ಪ ಹಾಕಿದರು. ಈಕೆಯಾದರೊ ತನ್ನ ಬಡತನದಲ್ಲಿಯೂ ತನಗಿದ್ದದ್ದನ್ನೆಲ್ಲ ಕೊಟ್ಟುಬಿಟ್ಟಳು. ಈಕೆಗೆ ಆ ಹಣದ ಅಗತ್ಯವಿತ್ತು” ಎಂದನು.

## ದೇವಾಲಯದ ಮುಂದಿನ ವಿನಾಶ

(ಮತ್ತಾಯ 24:1-44; ಲೂಕ 21:5-33)

13 ಯೇಸು ದೇವಾಲಯದಿಂದ ಹೊರಡುತ್ತಿರಲು ಆತನ ಶಿಷ್ಯರಲ್ಲಿ ಒಬ್ಬನು ಆತನಿಗೆ, “ಗುರುವೇ, ನೋಡು! ಈ ದೇವಾಲಯ ಎಂಥಾ ದೊಡ್ಡಕಲ್ಲುಗಳಿಂದ ಮಾಡಿದ ಎಂಥಾ ಸುಂದರ ಕಟ್ಟಡಗಳನ್ನು ಹೊಂದಿದೆ” ಎಂದನು.

2ಯೇಸು, “ನೀವು ಈ ದೊಡ್ಡ ಕಟ್ಟಡಗಳನ್ನು ನೋಡುತ್ತಿರುವಿರಾ? ಇವುಗಳನ್ನೆಲ್ಲ ನಾಶಪಡಿಸಲಾಗುವುದು. ಪ್ರತಿಯೊಂದು ಕಲ್ಲನ್ನೂ ನೆಲಕ್ಕೆ ಕೆಡವಲಾಗುವುದು. ಒಂದು ಕಲ್ಲಿನ ಮೇಲೆ ಮತ್ತೊಂದು ಕಲ್ಲು ಉಳಿಯುವುದಿಲ್ಲ” ಎಂದನು.

3ನಂತರ ಯೇಸು ಆಲಿವ್ ಮರಗಳ ಗುಡ್ಡದ ಮೇಲೆ, ಪೇತ್ರ, ಯಾಕೋಬ, ಯೋಹಾನ ಮತ್ತು ಅಂದ್ರೆಯರ ಸಂಗಡ ಕುಳಿತಿದ್ದನು. ಅವರೆಲ್ಲರಿಗೂ ಅಲ್ಲಿಂದ ದೇವಾಲಯ ಕಾಣುತ್ತಿತ್ತು. 4ಆ ಶಿಷ್ಯರು ಯೇಸುವಿಗೆ, “ಈ ಸಂಗತಿಗಳೆಲ್ಲಾ ಯಾವಾಗ ಸಂಭವಿಸುತ್ತವೆ? ಅವುಗಳು ನಡೆಯುವ ಕಾಲಕ್ಕೆ ಸೂಚನೆಯೇನು?” ಎಂದು ಕೇಳಿದರು.

5ಅದಕ್ಕೆ ಯೇಸು, “ಎಚ್ಚರಿಕೆಯಿಂದಿರಿ! ನಿಮಗೆ ಮೋಸ ಮಾಡಲು ಯಾರಿಗೂ ಆಸ್ಪದಕೊಡಬೇಡಿ. 6ಅನೇಕ ಜನರು ಬಂದು, ‘ನಾನೇ ಕ್ರಿಸ್ತನು,’ ‘ನಾನೇ ಕ್ರಿಸ್ತನು’ ಎನ್ನುತ್ತಾ ಅನೇಕ ಜನರನ್ನು ಮೋಸಗೊಳಿಸುತ್ತಾರೆ. 7ಸಮೀಪದಲ್ಲಿ ನಡೆಯುತ್ತಿರುವ ಯುದ್ಧಗಳ ಶಬ್ದವನ್ನೂ ಬಹುದೂರದಲ್ಲಿ ನಡೆಯುತ್ತಿರುವ ಯುದ್ಧಗಳ ಬಗ್ಗೆ ಸುದ್ದಿಯನ್ನೂ ನೀವು ಕೇಳುವಿರಿ. ಆದರೆ ಭಯಪಡಬೇಡಿ. ಅಂತ್ಯಕಾಲ ಬರುವುದಕ್ಕಿಂತ ಮುಂಚೆ ಈ ಸಂಗತಿಗಳು ನಡೆಯಲೇಬೇಕು. 8ಜನಾಂಗಗಳು ಇತರ ಜನಾಂಗಗಳ ವಿರುದ್ಧ ಹೋರಾಡುತ್ತವೆ. ರಾಜ್ಯಗಳು ಇತರ ರಾಜ್ಯಗಳ ವಿರುದ್ಧ ಹೋರಾಡುತ್ತವೆ. ಜನರಿಗೆ ತಿನ್ನಲು ಏನೂ ಆಹಾರವಿಲ್ಲದಂಥ ಕಾಲ ಬರುತ್ತದೆ. ಅನೇಕ ಸ್ಥಳಗಳಲ್ಲಿ ಭೂಕಂಪಗಳಾಗುತ್ತವೆ. ಈ ಸಂಗತಿಗಳು ಪ್ರಸವವೇದನೆಯಂತಿರುತ್ತವೆ.

9“ಎಚ್ಚರಿಕೆಯಿಂದಿರಿ! ನೀವು ನನ್ನನ್ನು ಹಿಂಬಾಲಿಸುವುದರಿಂದ ಜನರು ನಿಮ್ಮನ್ನು ಬಂಧಿಸಿ, ನ್ಯಾಯವಿಚಾರಣೆಗೆ ಕೊಂಡೊಯ್ಯುವರು. ತಮ್ಮ ಸಭಾಮಂದಿರಗಳಲ್ಲಿ ನಿಮ್ಮನ್ನು ಹೊಡೆಯುವರು. ರಾಜರ ಮತ್ತು ಅಧಿಪತಿಗಳ ಮುಂದೆ ನಿಮ್ಮನ್ನು ನಿಲ್ಲಿಸಿ ನನ್ನ ವಿಷಯದಲ್ಲಿ ಸಾಕ್ಷಿಕೊಡಲು ನಿಮ್ಮನ್ನು ಬಲವಂತಪಡಿಸುವರು. 10ಈ ಸಂಗತಿಗಳು ಸಂಭವಿಸುವುದಕ್ಕಿಂತ ಮೊದಲು ನೀವು ಜನರಿಗೆಲ್ಲ ಸುವಾರ್ತೆಯನ್ನು ತಿಳಿಸಬೇಕು. 11ನೀವು ಬಂಧಿಸಲ್ಪಟ್ಟು ನ್ಯಾಯವಿಚಾರಣೆಗೆ ಒಳಗಾಗುವಿರಿ. ಆದರೆ ನೀವು ಏನು ಹೇಳಬೇಕೆಂಬುದರ ಬಗ್ಗೆ ಯೋಚಿಸಬೇಡಿ. ಆ ಸಮಯದಲ್ಲಿ ದೇವರು ನಿಮಗೆ ತಿಳಿಸಿಕೊಡುವುದನ್ನೇ ಹೇಳಿರಿ. ಆಗ ಮಾತಾಡುವವರು ನೀವಲ್ಲ, ಪವಿತ್ರಾತ್ಮನೇ.

12“ಸಹೋದರರು ಸಹೋದರರನ್ನೇ, ತಂದೆಗಳು ತಮ್ಮ ಸ್ವಂತ ಮಕ್ಕಳನ್ನೇ ಮರಣಕ್ಕೆ ಗುರಿಮಾಡುವರು. ಮಕ್ಕಳು ತಮ್ಮ ಸ್ವಂತ ತಂದೆತಾಯಿಯರ ವಿರುದ್ಧ ತಿರುಗಿಬಿದ್ದು ಅವರನ್ನು ಕೊಲ್ಲಿಸುವರು. 13ನೀವು ನನ್ನನ್ನು ಹಿಂಬಾಲಿಸುವ ಕಾರಣ ಜನರೆಲ್ಲರೂ ನಿಮ್ಮನ್ನು ದ್ವೇಷಿಸುವರು. ಆದರೆ ಕೊನೆಯವರೆಗೆ ತಾಳುವವನು ರಕ್ಷಣೆಹೊಂದುವನು.

14“ವಿನಾಶವನ್ನು ಉಂಟುಮಾಡುವ ಭಯಂಕರ ವಸ್ತುವನ್ನು ನೀವು ನೋಡುತ್ತೀರಿ. ಇದು ನಿಂತುಕೊಳ್ಳಬಾರದಂಥ ಸ್ಥಳದಲ್ಲಿ ನಿಂತಿರುವುದನ್ನು ನೀವು ನೋಡುವಿರಿ. (ಇದನ್ನು ಓದುವವನು ಇದರ ಅರ್ಥವನ್ನು ತಿಳಿದುಕೊಳ್ಳಬೇಕು.) ಆ ಸಮಯದಲ್ಲಿ ಜುದೇಯದಲ್ಲಿರುವ ಜನರು ಬೆಟ್ಟಗಳಿಗೆ ಓಡಿಹೋಗಬೇಕು. 15ಮಾಳಿಗೆಯ ಮೇಲಿರುವವನು ಕೆಳಗಿಳಿದು ಮನೆಯೊಳಗಿಂದ ಏನನ್ನೂ ತೆಗೆದುಕೊಳ್ಳದೆ ಓಡಿಹೋಗಲಿ. 16ಹೊಲದಲ್ಲಿರುವವನು ತನ್ನ ಹೊದಿಕೆಯನ್ನು ತೆಗೆದುಕೊಳ್ಳಲು ಹಿಂತಿರುಗದಿರಲಿ. 17ಆ ಸಮಯವು ಗರ್ಭಿಣಿ ಸ್ತ್ರೀಯರಿಗೆ ಹಾಗೂ ಎಳೆಕೂಸುಗಳನ್ನು ಹೊಂದಿರುವ ತಾಯಂದಿರಿಗೆ ಬಹಳ ಸಂಕಟಕರವಾಗಿರುತ್ತದೆ. 18ಈ ಸಂಗತಿ

---

**ತಾಮ್ರದ ನಾಣ್ಯಗಳು** ಯೆಹೂದ್ಯರ ಅತ್ಯಂತ ಸಣ್ಣ ನಾಣ್ಯ.

ಗಳು ಚಳಿಗಾಲದಲ್ಲಿ ನಡೆಯದಂತೆ ಪ್ರಾರ್ಥನೆ ಮಾಡಿರಿ.
19ಏಕೆಂದರೆ ಆ ದಿನಗಳು ಬಹಳ ಸಂಕಟದಿಂದ ತುಂಬಿರುತ್ತವೆ.
ದೇವರು ಈ ಲೋಕವನ್ನು ಸೃಷ್ಟಿ ಮಾಡಿದಂದಿನಿಂದ ಅಂಥ
ಸಂಕಟ ಇದುವರೆಗೂ ಆಗಿಲ್ಲ, ಇನ್ನು ಮುಂದೆಯೂ ಆಗುವು
ದಿಲ್ಲ. 20ದೇವರು ಆ ಭಯಂಕರ ಕಾಲವನ್ನು ಕಡಿಮೆಗೊಳಿಸಲು
ನಿರ್ಧರಿಸಿದ್ದಾನೆ. ಇಲ್ಲವಾಗಿದ್ದರೆ, ಯಾವ ಮನುಷ್ಯನೂ ಬದುಕಿ
ಉಳಿಯಲು ಸಾಧ್ಯವಿಲ್ಲ. ಆದರೆ ದೇವರು ತಾನು ಆರಿಸಿಕೊಂಡ
ವಿಶೇಷ ಜನರಿಗೆ ಸಹಾಯಮಾಡಲು ಆ ಸಮಯವನ್ನು ಕಡಿಮೆ
ಮಾಡುವನು. 21ಆ ಸಮಯದಲ್ಲಿ, ಯಾರಾದರೂ ನಿಮಗೆ
'ಕ್ರಿಸ್ತನು ಅಲ್ಲಿದ್ದಾನೆ, ನೋಡು' ಎನ್ನಬಹುದು. ಅಥವಾ
ಇನ್ನೊಬ್ಬನು, 'ಆತನು ಇಲ್ಲಿದ್ದಾನೆ' ಎನ್ನಬಹುದು. ಆದರೆ
ಅವರನ್ನು ನಂಬಬೇಡಿ. 22 ದೇವರು ಆರಿಸಿಕೊಂಡ ಜನರನ್ನು
ಮೋಸಗೊಳಿಸುವುದಕ್ಕಾಗಿ ಸುಳುಕ್ರಿಸ್ತರು ಮತ್ತು ಸುಳ್ಳು
ಪ್ರವಾದಿಗಳು ಬಂದು ಮಹಾಕಾರ್ಯಗಳನ್ನೂ ಅದ್ಭುತಕಾರ್ಯ
ಗಳನ್ನೂ ಮಾಡುತ್ತಾರೆ. 23ಆದ್ದರಿಂದ ಎಚ್ಚರಿಕೆಯಿಂದಿರಿ, ಇದು
ನಡೆಯುವ ಮುಂಚೆ ಇದೆಲ್ಲದರ ಬಗ್ಗೆ ನಿಮ್ಮನ್ನು ಎಚ್ಚರಿಸಿದ್ದೇನೆ.

> 24''ಈ ಸಂಕಟವು ತೀರಿದ ಮೇಲೆ, 'ಸೂರ್ಯನು
> ಕತ್ತಲಾಗುತ್ತಾನೆ. ಚಂದ್ರನು ಬೆಳಕನ್ನು
> ಕೊಡುವುದಿಲ್ಲ.
> 25 ನಕ್ಷತ್ರಗಳು ಆಕಾಶದಿಂದ ಬೀಳುವವು. ಮತ್ತು
> ಆಕಾಶದಲ್ಲಿರುವ ಶಕ್ತಿಗಳು ನಡುಗುವವು.'
> *ಯೆಶಾಯ 13:10; 34:4*

26''ಆಗ ಮನುಷ್ಯಕುಮಾರನು ಅಧಿಕಾರದಿಂದಲೂ,
ಮಹಾಮಹಿಮೆಯೊಡನೆಯೂ ಮೇಘಗಳಲ್ಲಿ ಬರುವುದನ್ನು
ಜನರು ನೋಡುತ್ತಾರೆ. 27ಮನುಷ್ಯಕುಮಾರನು ತನ್ನ
ದೂತರನ್ನು ಭೂಮಿಯ ಎಲ್ಲಾ ಕಡೆಗೆ ಕಳುಹಿಸಿ ತಾನು ಆರಿಸಿ
ಕೊಂಡ ಜನರನ್ನು ಭೂಮಿಯ ಕಟ್ಟಕಡೆಗಳಿಂದ ಒಟ್ಟು
ಗೂಡಿಸುವರು.

28''ಅಂಜೂರದ ಮರವು ನಮಗೆ ಒಂದು ಪಾಠವನ್ನು
ಕಲಿಸುತ್ತದೆ. ಅಂಜೂರದ ಮರದ ಕೊಂಬೆಗಳು ಹಸಿರಾಗಿ
ಮೃದುವಾದಾಗ, ಮತ್ತು ಹೊಸ ಎಲೆಗಳು ಬೆಳೆಯಲು
ಪ್ರಾರಂಭಿಸಿದಾಗ, ಬೇಸಿಗೆಕಾಲ ಹತ್ತಿರವಾಯಿತೆಂದು ನೀವು
ತಿಳಿದುಕೊಳ್ಳುತ್ತೀರಿ. 29ಅಂತೆಯೇ ನಾನು ನಿಮಗೆ ಹೇಳಿದ ಈ
ಸಂಗತಿಗಳು ನೆರವೇರುವುದನ್ನು ನೀವು ನೋಡುವಾಗ,
ಸಮಯವು ಹತ್ತಿರವಾಗಿದೆಯೆಂದೂ ಬರಲು ಸಿದ್ಧವಾಗಿದೆ
ಯೆಂದೂ ತಿಳಿದುಕೊಳ್ಳಿರಿ. 30ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ಈ ಕಾಲದ ಜನರು ಇನ್ನೂ ಬದುಕಿರುವಾಗಲೇ ಈ ಎಲ್ಲಾ
ಸಂಗತಿಗಳು ನಡೆಯುತ್ತವೆ. 31ಭೂಮ್ಯಾಕಾಶಗಳು ನಾಶವಾಗು
ತ್ತವೆ. ಆದರೆ ನಾನು ಹೇಳಿದ ಮಾತುಗಳು ಎಂದೆಂದಿಗೂ
ನಾಶವಾಗುವುದಿಲ್ಲ.

32''ಆ ದಿನವಾಗಲಿ ಸಮಯವಾಗಲಿ ಯಾವಾಗ
ಬರುತ್ತದೆಂಬುದು ಪರಲೋಕದಲ್ಲಿರುವ ಮಗನಿಗಾಗಲಿ
ದೇವದೂತರಿಗಾಗಲಿ ತಿಳಿದಿಲ್ಲ. ತಂದೆಗೆ ಮಾತ್ರ ತಿಳಿದಿದೆ.
33ಎಚ್ಚರಿಕೆಯಿಂದಿರಿ! ಯಾವಾಗಲೂ ಸಿದ್ಧರಾಗಿರಿ! ಆ ಸಮಯ
ಯಾವಾಗ ಬರುತ್ತದೆಂದು ನಿಮಗೆ ತಿಳಿದಿಲ್ಲ. 34ತನ್ನ ಮನೆಯನ್ನು
ಬಿಟ್ಟು ಪ್ರವಾಸಕ್ಕಾಗಿ ಹೋದ ಮನುಷ್ಯನಿಗೆ ಇದು ಹೋಲಿಕೆ
ಯಾಗಿದೆ. ಅವನು ತನ್ನ ಮನೆಯನ್ನು ನೋಡಿಕೊಳ್ಳುವುದಕ್ಕಾಗಿ
ಸೇವಕರಿಗೆ ಒಪ್ಪಿಸಿಕೊಟ್ಟನು. ಅವನು ಪ್ರತಿಯೊಬ್ಬ ಸೇವಕನಿಗೂ
ಒಂದೊಂದು ವಿಶೇಷ ಕೆಲಸವನ್ನು ಕೊಟ್ಟು ದ್ವಾರಪಾಲಕನಿಗೆ,
'ನೀನು ಯಾವಾಗಲೂ ಸಿದ್ಧವಾಗಿರು' ಎಂದು ಹೇಳಿದನು.
ಅಂತೆಯೇ ನಾನೂ ನಿಮಗೆ ಹೇಳುವುದೇನೆಂದರೆ, 35ಯಾವಾ
ಗಲೂ ಸಿದ್ಧವಾಗಿರಿ. ಮನೆಯ ಯಜಮಾನನು ಯಾವಾಗ
ಹಿಂತಿರುಗಿ ಬರುವನೊ ನಿಮಗೆ ತಿಳಿದಿಲ್ಲ. ಅವನು ಮಧ್ಯಾಹ್ನ
ದಲ್ಲಾಗಲಿ ಮಧ್ಯರಾತ್ರಿಯಲ್ಲಾಗಲಿ ಮುಂಜಾನೆಯಲ್ಲಾಗಲಿ
ಸೂರ್ಯೋದಯದಲ್ಲಾಗಲಿ ಬರಬಹುದು. 36ಯಜಮಾನನು
ಬೇಗನೆ ಹಿಂತಿರುಗಿ ಬರಬಹುದು. ನೀವು ಯಾವಾಗಲೂ
ಸಿದ್ಧವಾಗಿದ್ದರೆ, ಅವನು ಬಂದಾಗ ನೀವು ನಿದ್ರಿಸುತ್ತಿರುವುದಿಲ್ಲ.
37ನಾನು ನಿಮಗೂ ಪ್ರತಿಯೊಬ್ಬರಿಗೂ ಹೇಳುವುದೇನಂದರೆ,
'ಸಿದ್ಧರಾಗಿರಿ!'

### ಯೇಸುವನ್ನು ಕೊಲ್ಲಲು ಯೆಹೂದ್ಯನಾಯಕರ ಯೋಜನೆ

(ಮತ್ತಾಯ 26:1-5; ಲೂಕ 22:1-2; ಯೋಹಾನ 11:45-53)

14 ಪಸ್ಕ ಮತ್ತು ಹುಳಿಯಿಲ್ಲದ ರೊಟ್ಟಿಯ ಹಬ್ಬಕ್ಕೆ ಕೇವಲ
ಎರಡು ದಿನಗಳಿದ್ದವು. ಮಹಾಯಾಜಕರು ಹಾಗೂ
ಧರ್ಮೋಪದೇಶಕರು ಯಾವುದಾದರೊಂದು ಸುಳ್ಳು ಅಪವಾದ
ವನ್ನು ಕಂಡುಹಿಡಿದು ಯೇಸುವನ್ನು ಬಂಧಿಸಿ ಆತನನ್ನು ಕೊಲ್ಲ
ಬೇಕೆಂದಿದ್ದರು. 2ಆದರೆ, ''ಹಬ್ಬದ ಸಮಯದಲ್ಲಿ ನಾವು
ಯೇಸುವನ್ನು ಬಂಧಿಸಲು ಸಾಧ್ಯವಿಲ್ಲ. ಜನರು ಕೋಪ
ಗೊಂಡು, ಗಲಭೆ ಎಬ್ಬಿಸುವ ಸಾಧ್ಯತೆಯಿದೆ'' ಎಂದು ಅವರು
ಮಾತಾಡಿಕೊಂಡರು.

### ಸ್ತ್ರೀಯೊಬ್ಬಳು ಯೇಸುವಿಗೆ ಮಾಡಿದ ವಿಶೇಷಕಾರ್ಯ

(ಮತ್ತಾಯ 26:6-13; ಯೋಹಾನ 12:1-8)

3ಬೆಥಾನಿಯದಲ್ಲಿ ಯೇಸು ಕುಷ್ಠರೋಗಿ ಸಿಮೋನನ
ಮನೆಯಲ್ಲಿ ಊಟ ಮಾಡುತ್ತಿದ್ದಾಗ ಸ್ತ್ರೀಯೊಬ್ಬಳು ಆತನ ಬಳಿಗೆ
ಬಂದಳು. ಆಕೆಯ ಬಳಿ ಅತ್ಯಂತ ಬೆಲೆ ಬಾಳುವ ಪರಿಮಳದ್ರವ್ಯದ
ಭರಣಿ ಇತ್ತು. ಈ ಪರಿಮಳದ್ರವ್ಯವನ್ನು ಶುದ್ಧವಾದ ನಾರ್ಡ್*
ತೈಲದಿಂದ ಮಾಡಲಾಗಿತ್ತು. ಆ ಸ್ತ್ರೀಯು ಭರಣಿ ಯನ್ನು ತೆರೆದು,
ಆ ತೈಲವನ್ನು ಯೇಸುವಿನ ತಲೆಯ ಮೇಲೆ ಸುರಿದಳು.

4ಅಲ್ಲಿದ್ದ ಕೆಲವು ಶಿಷ್ಯರು ಇದನ್ನು ನೋಡಿ ಕೋಪಗೊಂಡು
ಆಕ್ಷೇಪಿಸಿದರು. ''ಆ ಪರಿಮಳ ತೈಲವನ್ನು ಹಾಳುಮಾಡಿದ್ದೇಕೆ?
5ಅದು ಒಂದು ವರ್ಷದ ಸಂಪಾದನೆಗಿಂತ ಹೆಚ್ಚು ಬೆಲೆ
ಬಾಳುತ್ತಿತ್ತು. ಅದನ್ನು ಮಾರಿ ಬಂದ ಹಣವನ್ನು ಬಡಜನರಿಗೆ
ಕೊಡಬಹುದಾಗಿತ್ತು'' ಎಂದು ಹೇಳಿ ಆ ಸ್ತ್ರೀಯನ್ನು ಕಟುವಾಗಿ
ಟೀಕಿಸಿದರು.

6ಯೇಸು, ''ಆಕೆಗೆ ತೊಂದರೆ ಕೊಡಬೇಡಿ. ನೀವು
ಆಕೆಯನ್ನು ಕಾಡಿಸುವುದೇಕೆ? ಅವಳು ನನಗಾಗಿ ಬಹಳ ಒಳ್ಳೆಯ
ದನ್ನು ಮಾಡಿದಳು. 7ನಿಮ್ಮೊಡನೆ ಬಡಜನರು ಯಾವಾಗಲೂ
ಇರುತ್ತಾರೆ. ನಿಮಗೆ ಇಷ್ಟ ಬಂದ ಸಮಯದಲ್ಲಿ ನೀವು ಅವರಿಗೆ
ಸಹಾಯ ಮಾಡಬಹುದು. ಆದರೆ ನಾನು ನಿಮ್ಮೊಂದಿಗೆ

---

**ನಾರ್ಡ್** ನಾರ್ಡ್ ಎಂಬ ಸಸ್ಯದ ಬೇರುಗಳಿಂದ ತಯಾರಿಸಿದ ಬೆಲೆಬಾಳುವ ಪರಿಮಳ ತೈಲ.

ಯಾವಾಗಲೂ ಇರುವುದಿಲ್ಲ. 8ಈಕೆ ನನಗಾಗಿ ತನ್ನಿಂದ ಸಾಧ್ಯ
ವಾದ ಒಂದು ಕಾರ್ಯವನ್ನು ಮಾಡಿದಳು. ನಾನು ಸಾಯುವುದ
ಕ್ಕಿಂತ ಮುಂಚೆ ನನ್ನನ್ನು ಸಮಾಧಿಗೆ ಸಿದ್ಧಮಾಡಲು ಆಕೆ ನನ್ನ
ದೇಹದ ಮೇಲೆ ಪರಿಮಳ ತೈಲ ಸುರಿದಳು. 9ನಾನು ಸತ್ಯವನ್ನು
ಹೇಳುತ್ತೇನೆ. ಪ್ರಪಂಚದಲ್ಲಿ ಸುವಾರ್ತೆ ಸಾರಲ್ಪಡುವಲ್ಲೆಲ್ಲಾ ಈಕೆ
ಮಾಡಿದ ಈ ಕಾರ್ಯವನ್ನು ತಿಳಿಸುವುದರಿಂದ ಜನರು
ಈಕೆಯನ್ನು ನೆನಪು ಮಾಡಿಕೊಳ್ಳುವರು'' ಎಂದು ಹೇಳಿದನು.

10ನಂತರ ಹನ್ನೆರಡು ಮಂದಿ ಅಪೊಸ್ತಲರಲ್ಲಿ ಒಬ್ಬನಾದ
ಇಸ್ಕರಿಯೋತ ಯೂದನು ಯೇಸುವನ್ನು ಹಿಡಿದುಕೊಡ
ಬೇಕೆಂಬ ದುರುದ್ದೇಶದಿಂದ ಮಹಾಯಾಜಕರೊಡನೆ
ಮಾತಾಡಲು ಹೋದನು. 11ಮಹಾಯಾಜಕರು ಇದರ ಬಗ್ಗೆ
ಬಹಳ ಸಂತೋಷಗೊಂಡು, ಹಣ ಕೊಡುವುದಾಗಿ ಯೂದನಿಗೆ
ಮಾತುಕೊಟ್ಟರು. ಆದ್ದರಿಂದ ಅವರಿಗೆ ಯೇಸುವನ್ನು ಹಿಡಿದು
ಕೊಡಲು ಅತ್ಯಂತ ಉತ್ತಮವಾದ ಸಮಯಕ್ಕಾಗಿ ಯೂದನು
ಕಾಯುತ್ತಿದ್ದನು.

12ಅಂದು ಹುಳಿಯಿಲ್ಲದ ರೊಟ್ಟಿಯ ಹಬ್ಬದ ಮೊದಲನೆಯ
ದಿನವಾಗಿತ್ತು. ಯೆಹೂದಿಗಳು ಯಾವಾಗಲೂ ಪಸ್ಕ ಹಬ್ಬದ ಕುರಿ
ಮರಿಗಳನ್ನು ಯಜ್ಞ ಮಾಡುವ ಸಮಯ ಇದಾಗಿತ್ತು. ಯೇಸು
ವಿನ ಶಿಷ್ಯರು ಆತನ ಬಳಿಗೆ ಬಂದು, ''ನಾವು ಪಸ್ಕಹಬ್ಬದ ಊಟ
ವನ್ನು ನಿನಗಾಗಿ ಎಲ್ಲಿ ಸಿದ್ಧಪಡಿಸೋಣ?'' ಎಂದು ಕೇಳಿದರು.

13ಯೇಸು ತನ್ನ ಶಿಷ್ಯರಲ್ಲಿ ಇಬ್ಬರನ್ನು ಕರೆದು, ''ನೀವು
ಪಟ್ಟಣದೊಳಕ್ಕೆ ಹೋದಾಗ, ಒಬ್ಬ ಮನುಷ್ಯನು ನೀರಿನ
ಕೊಡವನ್ನು ಹೊತ್ತುಕೊಂಡು ನಿಮ್ಮ ಎದುರಿಗೆ ಬರುವನು.
ಅವನನ್ನೇ ಹಿಂಬಾಲಿಸಿರಿ. 14ಅವನು ಒಂದು ಮನೆಯೊಳಗೆ
ನಡೆದು ಹೋಗುತ್ತಾನೆ. ನೀವು ಆ ಮನೆಯ ಯಜಮಾನನಿಗೆ,
'ನಮ್ಮ ಗುರುವು ತನ್ನ ಶಿಷ್ಯರ ಸಂಗಡ ಪಸ್ಕಹಬ್ಬದ ಊಟ
ಮಾಡಲು ಒಂದು ಕೋಣೆಯನ್ನು ತೋರಿಸಬೇಕೆಂದು ಕೇಳು
ತ್ತಾನೆ' ಎಂದು ಹೇಳಿ.

15ಆ ಯಜಮಾನನು ಮೇಲಂತಸ್ತಿನಲ್ಲಿ ಸಿದ್ಧವಾಗಿರುವ
ಒಂದು ದೊಡ್ಡ ಕೋಣೆಯನ್ನು ತೋರಿಸುತ್ತಾನೆ. ಅಲ್ಲಿ
ನಮಗಾಗಿ ಊಟವನ್ನು ಸಿದ್ಧಪಡಿಸಿರಿ'' ಎಂದನು.

16ಆದ್ದರಿಂದ ಶಿಷ್ಯರು ಅಲ್ಲಿಂದ ಹೊರಟು, ಪಟ್ಟಣದೊಳಗೆ
ಹೋದರು. ಯೇಸು ಹೇಳಿದ ರೀತಿಯಲ್ಲಿಯೇ ಪ್ರತಿಯೊಂದೂ
ನಡೆಯಿತು. ಶಿಷ್ಯರು ಪಸ್ಕಹಬ್ಬದ ಊಟವನ್ನು ಸಿದ್ಧಪಡಿಸಿದರು.

17ಸಾಯಂಕಾಲದಲ್ಲಿ ಯೇಸು ಹನ್ನೆರಡು ಜನ
ಅಪೊಸ್ತಲರೊಂದಿಗೆ ಆ ಮನೆಗೆ ಹೋದನು. 18ಅವರೆಲ್ಲರೂ
ಊಟ ಮಾಡುತ್ತಿರುವಾಗ, ಯೇಸು, ''ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ನಿಮ್ಮಲ್ಲಿ ಒಬ್ಬನು ನನಗೆ ದ್ರೋಹ ಬಗೆಯುತ್ತಾನೆ.
ಈಗ ಅವನು ನನ್ನೊಂದಿಗೆ ಊಟ ಮಾಡುತ್ತಿದ್ದಾನೆ'' ಎಂದನು.

19ಇದನ್ನು ಕೇಳಿದಾಗ ಶಿಷ್ಯರಿಗೆ ಬಹಳ ದುಃಖವಾಯಿತು.
ಪ್ರತಿಯೊಬ್ಬ ಶಿಷ್ಯನೂ ಯೇಸುವಿಗೆ, ''ಖಂಡಿತವಾಗಿ ನಾನು
ನಿನಗೆ ದ್ರೋಹಮಾಡುವುದಿಲ್ಲ'' ಎಂದನು.

20ಯೇಸು, ''ಈ ಹನ್ನೆರಡು ಜನರಲ್ಲಿ ಒಬ್ಬನು ನನಗೆ
ದ್ರೋಹ ಬಗೆಯುತ್ತಾನೆ. ಅವನು ನನ್ನೊಡನೆ ಒಂದೇ
ಬಟ್ಟಲಿನಲ್ಲಿ ತನ್ನ ರೊಟ್ಟಿಯನ್ನು ಅದ್ದುತ್ತಿದ್ದಾನೆ. 21ಮನುಷ್ಯ
ಕುಮಾರನು ಹೋಗಿ, ಸಾಯುತ್ತಾನೆ. ಪವಿತ್ರಗ್ರಂಥದಲ್ಲಿಯೂ
ಅದನ್ನು ಬರೆಯಲಾಗಿದೆ. ಆದರೆ ಮನುಷ್ಯಕುಮಾರನನ್ನು
ಕೊಲ್ಲಲು ಹಿಡಿದುಕೊಡುವ ವ್ಯಕ್ತಿಯ ಸ್ಥಿತಿ ಬಹಳ ಭೀಕರ
ವಾಗಿರುತ್ತದೆ. ಅವನು ಹುಟ್ಟದೇ ಇದ್ದಿದ್ದರೆ ಅವನಿಗೆ ಒಳ್ಳೆಯ
ದಾಗುತ್ತಿತ್ತು'' ಎಂದನು.

### ಪ್ರಭುವಿನ ಭೋಜನ

(ಮತ್ತಾಯ 26:26-30; ಲೂಕ 22:15-20; 1 ಕೊರಿಂಥ 11: 23:25)

22ಅವರು ಊಟಮಾಡುತ್ತಿರುವಾಗ, ಯೇಸು ರೊಟ್ಟಿ
ಯನ್ನು ತೆಗೆದುಕೊಂಡು, ಅದಕ್ಕಾಗಿ ದೇವರಿಗೆ ಸ್ತೋತ್ರ ಸಲ್ಲಿಸಿ
ಅದನ್ನು ಮುರಿದು, ತನ್ನ ಶಿಷ್ಯರಿಗೆ ಕೊಟ್ಟನು. ಯೇಸು ಅವರಿಗೆ,
''ಈ ರೊಟ್ಟಿಯನ್ನು ತೆಗೆದುಕೊಂಡು ತಿನ್ನಿರಿ. ಈ ರೊಟ್ಟಿಯು
ನನ್ನ ದೇಹ'' ಎಂದನು.

23ನಂತರ ಯೇಸು ದ್ರಾಕ್ಷಾರಸದ ಪಾತ್ರೆಯನ್ನು ತೆಗೆದು
ಕೊಂಡು ಅದಕ್ಕಾಗಿ ದೇವರಿಗೆ ಸ್ತೋತ್ರ ಸಲ್ಲಿಸಿ ಅದನ್ನು ತನ್ನ
ಶಿಷ್ಯರಿಗೆ ಕೊಟ್ಟನು. ಶಿಷ್ಯರೆಲ್ಲರೂ ಅದರಲ್ಲಿ ಕುಡಿದರು.

24ಯೇಸು, ''ಇದು ನನ್ನ ರಕ್ತ. ಇದು ಒಡಂಬಡಿಕೆಯ ರಕ್ತ.
ಇದು ಬಹು ಜನರಿಗೋಸ್ಕರ ಸುರಿಸಲ್ಪಡುವ ರಕ್ತ. 25ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ನಾನು ದೇವರ ರಾಜ್ಯದಲ್ಲಿ
ದ್ರಾಕ್ಷಾರಸವನ್ನು ಹೊಸದಾಗಿ ಕುಡಿಯುವ ದಿನದವರೆಗೆ ಇದನ್ನು
ಕುಡಿಯುವುದೇ ಇಲ್ಲ'' ಎಂದನು. 26ಆಗ ಶಿಷ್ಯರೆಲ್ಲರೂ ಒಂದು
ಹಾಡನ್ನು* ಹಾಡಿದರು. ನಂತರ ಅವರು ಆಲಿವ್ ಮರದ
ಗುಡ್ಡಕ್ಕೆ ಹೋದರು.

### ಶಿಷ್ಯರ ವಿಶ್ವಾಸ ದ್ರೋಹದ ಮುನ್ಸೂಚನೆ

(ಮತ್ತಾಯ 26:31-35; ಲೂಕ 22:31-34; ಯೋಹಾನ 13:36-38)

27ನಂತರ ಯೇಸು ಶಿಷ್ಯರಿಗೆ, ''ನೀವೆಲ್ಲರೂ ಭಯ
ಗೊಂಡು ಹಿಂಜರಿಯುವಿರಿ.

> 'ನಾನು ಕುರುಬನನ್ನು ಹೊಡೆಯುವೆನು; ಆಗ
> ಕುರಿಗಳು ಚದರಿಹೋಗುತ್ತವೆ.'
>
> *ಜೆಕರ್ಯ 13:7*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.

28ಆದರೆ ನಾನು ಸತ್ತು ಪುನರುತ್ಥಾನ ಹೊಂದಿದ ಮೇಲೆ
ನಿಮಗಿಂತ ಮುಂಚಿತವಾಗಿ ಗಲಿಲೇಯಕ್ಕೆ ಹೋಗುತ್ತೇನೆ''
ಎಂದನು.

29ಪೇತ್ರನು, ''ಉಳಿದ ಶಿಷ್ಯರೆಲ್ಲರು ಭಯಗೊಂಡು
ಹಿಂಜರಿದರೂ ನಾನು ಹಿಂಜರಿಯುವುದಿಲ್ಲ'' ಎಂದು
ಉತ್ತರಿಸಿದನು.

30ಯೇಸು, ''ನಾನು ಸತ್ಯವನ್ನು ಹೇಳುತ್ತೇನೆ. ಈ ರಾತ್ರಿ
ಕೋಳಿ ಎರಡು ಸಾರಿ ಕೂಗುವುದಕ್ಕಿಂತ ಮುಂಚೆ ನೀನು
ಮೂರು ಸಾರಿ, ನನ್ನನ್ನು ನೀನು ತಿಳಿದೇ ಇಲ್ಲವೆಂದು ಹೇಳುವೆ''
ಎಂದು ಉತ್ತರಿಸಿದನು.

31ಆದರೆ ಪೇತ್ರನು ಖಚಿತವಾಗಿ, ''ನಾನು ನಿನ್ನೊಂದಿಗೆ
ಸಾಯಬೇಕಾದರೂ ಸರಿಯೇ, ನಿನ್ನನ್ನು ತಿಳಿದೇ ಇಲ್ಲವೆಂದು
ನಾನೆಂದಿಗೂ ಹೇಳುವುದಿಲ್ಲ'' ಎಂದು ಉತ್ತರಿಸಿದನು. ಉಳಿದ
ಶಿಷ್ಯರು ಸಹ ಇದೇ ರೀತಿ ಹೇಳಿದರು.

---

**ಹಾಡನ್ನು** ಬಹುಶಃ ಕೀರ್ತನೆಗಳು 115-118.

### ಯೇಸುವಿನ ಏಕಾಂತ ಪ್ರಾರ್ಥನೆ

(ಮತ್ತಾಯ 26:36-46; ಲೂಕ 22:39-46)

32ಯೇಸು ಮತ್ತು ಆತನ ಶಿಷ್ಯರು ಗೆತ್ಸೆಮನೆ ಎಂಬ ಸ್ಥಳಕ್ಕೆ
ಹೋದರು. ಯೇಸು ತನ್ನ ಶಿಷ್ಯರಿಗೆ, ‘‘ನಾನು ಪ್ರಾರ್ಥಿಸಿ
ಬರುವತನಕ ಕುಳಿತಿರಿ’’ ಎಂದು ಹೇಳಿ 33ಪೇತ್ರನನ್ನು,
ಯಾಕೋಬನನ್ನು ಮತ್ತು ಯೋಹಾನನನ್ನು ತನ್ನ ಜೊತೆ
ಕರೆದುಕೊಂಡು ಹೋದನು. ನಂತರ ಯೇಸು ಬಹಳ ಗಲಿಬಿಲಿ
ಗೊಂಡು, ದುಃಖದಿಂದ ತುಂಬಿದವನಾದನು. 34ಯೇಸು
ಅವರಿಗೆ, ‘‘ನನ್ನ ಪ್ರಾಣವು ಸಾಯುವಷ್ಟು ದುಃಖದಿಂದ ತುಂಬಿ
ಹೋಗಿದೆ. ಎಚ್ಚರವಾಗಿದ್ದು ಇಲ್ಲಿಯೇ ಕಾದುಕೊಂಡಿರಿ’’
ಎಂದನು.

35ಯೇಸು ಅವರಿಂದ ಸ್ವಲ್ಪದೂರ ನಡೆದುಹೋಗಿ
ನೆಲದಮೇಲೆ ಬೋರಲಬಿದ್ದು, ಪ್ರಾರ್ಥಿಸುತ್ತಾ ‘‘ಸಾಧ್ಯವಾದರೆ,
ಈ ಸಂಕಟದಗಳಿಗೆ ನನಗೆ ಬಾರದಿರಲಿ’’ ಎಂದು ಬೇಡಿ
ಕೊಂಡನು. 36ಬಳಿಕ ಯೇಸು, ‘‘ಅಪ್ಪಾ,* ತಂದೆಯೇ! ನಿನಗೆ
ಎಲ್ಲವೂ ಸಾಧ್ಯ. ಈ ಸಂಕಟದ ಪಾತ್ರೆಯನ್ನು ನನ್ನಿಂದ
ತೊಲಗಿಸು. ಆದರೆ ನನ್ನ ಚಿತ್ತದಂತೆ ಮಾಡದೆ, ನಿನ್ನ ಚಿತ್ತ
ದಂತೆಯೇ ಮಾಡು’’ ಎಂದು ಪ್ರಾರ್ಥಿಸಿದನು.

37ನಂತರ ಯೇಸು ತನ್ನ ಶಿಷ್ಯರ ಬಳಿಗೆ ಹಿಂತಿರುಗಿದಾಗ
ಅವರು ನಿದ್ರಿಸುತ್ತಿರುವುದನ್ನು ಕಂಡು, ಪೇತ್ರನಿಗೆ,
‘‘ಸೀಮೋನನೇ, ಏಕೆ ನಿದ್ರೆ ಮಾಡುತ್ತಿರುವೆ? ನೀನು ನನ್ನೊಡನೆ
ಒಂದು ಗಂಟೆ ಕಾಲ ಎಚ್ಚರವಾಗಿರಲು ಸಾಧ್ಯವಾಗಲಿಲ್ಲವೇ?
38ನೀನು ಶೋಧನೆಗೆ ಒಳಗಾಗದಂತೆ ಎಚ್ಚರವಾಗಿದ್ದು
ಪ್ರಾರ್ಥಿಸು. ಮನಸ್ಸೇನೊ ಸಿದ್ಧವಾಗಿದೆ, ಆದರೆ ದೇಹಕ್ಕೆ ಬಲ
ಸಾಲದು’’ ಎಂದನು.

39ಪುನಃ ಯೇಸು ದೂರಹೋಗಿ, ಮೊದಲಿನಂತೆಯೇ
ಪ್ರಾರ್ಥಿಸಿದನು. 40ನಂತರ ಯೇಸು ತನ್ನ ಶಿಷ್ಯರ ಬಳಿಗೆ
ಹಿಂತಿರುಗಿ ಬಂದಾಗ ಅವರು ನಿದ್ರಿಸುತ್ತಿರುವುದನ್ನು ಕಂಡನು.
ಅವರ ಕಣ್ಣುಗಳು ಬಹಳ ಆಯಾಸಗೊಂಡಿದ್ದವು. ಯೇಸುವಿಗೆ
ಆ ಶಿಷ್ಯರಿಗೆ ಏನು ಹೇಳಬೇಕೆಂದು ತಿಳಿಯಲಿಲ್ಲ.

41ಯೇಸು ಮೂರನೆಯ ಸಾರಿ ಪ್ರಾರ್ಥಿಸಿದ ಮೇಲೆ, ತನ್ನ
ಶಿಷ್ಯರ ಬಳಿಗೆ ಹಿಂತಿರುಗಿ, ‘‘ನೀವು ಇನ್ನೂ ನಿದ್ರಿಸುತ್ತಾ ವಿಶ್ರಾಂತಿ
ತೆಗೆದುಕೊಳ್ಳುತ್ತಿದ್ದೀರಾ? ಪಾಪಿಗಳ ಕೈಗೆ ಮನುಷ್ಯಕುಮಾರ
ನನ್ನು ಒಪ್ಪಿಸುವ ಸಮಯ ಬಂದಿದೆ. 42ಮೇಲೇಳಿ! ನಾವು
ಹೋಗಬೇಕು. ನನ್ನನ್ನು ಆ ಜನರಿಗೆ ಹಿಡಿದುಕೊಡುವವನು
ಇಲ್ಲಿಗೆ ಬರುತ್ತಿದ್ದಾನೆ’’ ಎಂದನು.

### ಯೇಸುವಿನ ಬಂಧನ

(ಮತ್ತಾಯ 26:47-56; ಲೂಕ 22:47-53; ಯೋಹಾನ18: 3-12)

43ಯೇಸು ಇನ್ನೂ ಮಾತಾಡುತ್ತಿರುವಾಗ, ಯೂದನು
ಅಲ್ಲಿಗೆ ಬಂದನು. ಹನ್ನೆರಡು ಜನ ಅಪೊಸ್ತಲರಲ್ಲಿ ಯೂದನು
ಒಬ್ಬನಾಗಿದ್ದನು. ಯೂದನೊಡನೆ ಕತ್ತಿ ಮತ್ತು ದೊಣ್ಣೆಗಳಿಂದ
ಸುಸಜ್ಜಿತರಾಗಿದ್ದ ಅನೇಕ ಜನರಿದ್ದರು. ಮಹಾಯಾಜಕರು,
ಧರ್ಮೋಪದೇಶಕರು ಮತ್ತು ಹಿರಿಯ ಯೆಹೂದ್ಯನಾಯಕರು
ಗಳು ಈ ಜನರನ್ನು ಕಳುಹಿಸಿದ್ದರು.

44ಯೇಸು ಯಾರೆಂಬುದನ್ನು ಜನರಿಗೆ ತೋರಿಸಲು
ಯೂದನು ಒಂದು ಉಪಾಯ ಮಾಡಿದನು. ಯೂದನು
ಅವರಿಗೆ, ‘‘ನಾನು ಯಾರಿಗೆ ಮುದ್ದಿಡುತ್ತೇನೋ ಅವನೇ
ಯೇಸು. ಅವನನ್ನು ಸೆರೆಹಿಡಿದು ಎಚ್ಚರಿಕೆಯಿಂದ ಕಾಯುತ್ತಾ
ಕರೆದುಕೊಂಡು ಹೋಗಿರಿ!’’ ಎಂದು ಹೇಳಿಕೊಟ್ಟಿದ್ದನು.
45ಆದ್ದರಿಂದ ಯೂದನು ಯೇಸುವಿನ ಬಳಿಗೆ ಹೋಗಿ,
‘‘ಗುರುವೇ!’’ ಎಂದು ಹೇಳಿ ಯೇಸುವಿಗೆ ಮುದ್ದಿಟ್ಟನು. 46ಆಗ
ಆ ಜನರು ಯೇಸುವನ್ನು ಬಂಧಿಸಿದರು. 47ಯೇಸುವಿನ ಹತ್ತಿರ
ನಿಂತಿದ್ದ ಶಿಷ್ಯರಲ್ಲಿ ಒಬ್ಬನು ತನ್ನ ಕತ್ತಿಯನ್ನು ಹೊರಗೆಳೆದು
ಪ್ರಧಾನಯಾಜಕನ ಸೇವಕನಿಗೆ ಹೊಡೆದು, ಅವನ ಕಿವಿಯನ್ನು
ಕತ್ತರಿಸಿ ಹಾಕಿದನು.

48 ಆಗ ಯೇಸು, ‘‘ಒಬ್ಬ ಅಪರಾಧಿಯನ್ನು ಬಂಧಿಸುವಂತೆ
ನೀವು ಕತ್ತಿಗಳನ್ನು ಮತ್ತು ದೊಣ್ಣೆಗಳನ್ನು ತೆಗೆದುಕೊಂಡು
ಬರಬೇಕಿತ್ತೇ? 49ಪ್ರತಿದಿನ ದೇವಾಲಯದಲ್ಲಿ ನಾನು
ಉಪದೇಶಿಸುತ್ತಾ ನಿಮ್ಮೊಡನೆ ಇದ್ದೆನು. ಅಲ್ಲಿ ನೀವು ನನ್ನನ್ನು
ಬಂಧಿಸಲಿಲ್ಲ. ಆದರೆ ಈ ಎಲ್ಲಾ ಸಂಗತಿಗಳು ಪವಿತ್ರ ಗ್ರಂಥದಲ್ಲಿ
ಬರೆದಿರುವಂತೆ ನಡೆದಿವೆ’’ ಎಂದನು. 50ಆಗ ಯೇಸುವಿನ
ಶಿಷ್ಯರೆಲ್ಲರೂ ಆತನನ್ನು ಬಿಟ್ಟು ಓಡಿಹೋದರು.

51ಯೇಸುವಿನ ಶಿಷ್ಯನಾಗಿದ್ದ ಒಬ್ಬ ಯುವಕನು ಅಲ್ಲಿದ್ದನು.
ಅವನು ನಾರುಬಟ್ಟೆಯನ್ನು ಧರಿಸಿದ್ದನು. ಜನರು ಅವನನ್ನು ಸಹ
ಹಿಡಿದುಕೊಂಡರು. 52ಅವನು ತಾನು ಧರಿಸಿಕೊಂಡಿದ್ದ ನಾರು
ಬಟ್ಟೆಯನ್ನು ಅಲ್ಲಿಯೇ ಬಿಟ್ಟು ಬರೀ ಮೈಯಲ್ಲಿ ಓಡಿ
ಹೋದನು.

### ಯೆಹೂದ್ಯನಾಯಕರ ಮುಂದೆ ಯೇಸು

(ಮತ್ತಾಯ 26:57-68; ಲೂಕ 22:54-55; 63-71;
ಯೋಹಾನ 18:13-14, 19-24)

53ಯೇಸುವನ್ನು ಬಂಧಿಸಿದ್ದ ಜನರು ಪ್ರಧಾನಯಾಜಕನ
ಮನೆಗೆ ಆತನನ್ನು ಕರೆದುಕೊಂಡು ಹೋದರು. ಎಲ್ಲಾ ಮಹಾ
ಯಾಜಕರುಗಳು, ಹಿರಿಯ ಯೆಹೂದ್ಯನಾಯಕರುಗಳು,
ಹಾಗೂ ಧರ್ಮೋಪದೇಶಕರು ಅಲ್ಲಿ ಸೇರಿದ್ದರು. 54ಪೇತ್ರನು
ಯೇಸುವನ್ನು ದೂರದಲ್ಲಿ ಹಿಂಬಾಲಿಸುತ್ತಾ ಪ್ರಧಾನಯಾಜಕನ
ಮನೆಯ ಅಂಗಳದೊಳಕ್ಕೆ ಹೋಗಿ, ಕಾವಲುಗಾರರೊಡನೆ
ಕುಳಿತುಕೊಂಡು ಬೆಂಕಿಯಿಂದ ಚಳಿಕಾಯಿಸಿಕೊಳ್ಳ
ತೊಡಗಿದನು.

55ಮಹಾಯಾಜಕರು ಹಾಗೂ ಹಿರಿಯ ಸಭೆಯವರೆಲ್ಲರು
ಆತನನ್ನು ಕೊಲ್ಲಲು ಸರಿಯಾದ ಒಂದು ತಪ್ಪನ್ನು ಆತನಲ್ಲಿ
ಕಂಡುಹಿಡಿಯುವುದಕ್ಕೆ ಪ್ರಯತ್ನಿಸಿದರು. ಆದರೆ ಯೇಸುವನ್ನು
ಕೊಲ್ಲಲು ಸರಿಯಾದ ಯಾವುದೇ ಆಧಾರವನ್ನು ಕಂಡು
ಹಿಡಿಯಲು ಸಮಿತಿಗೆ ಸಾಧ್ಯವಾಗಲಿಲ್ಲ. 56ಅನೇಕ ಜನರು
ಬಂದು, ಯೇಸುವಿನ ವಿರುದ್ಧ ಸುಳ್ಳುಸಂಗತಿಗಳನ್ನು ಹೇಳಿದರು.
ಆದರೆ ಅವರೆಲ್ಲರು ಒಂದಕ್ಕೊಂದು ಹೊಂದಾಣಿಕೆಯಾಗ
ದಂತಹ ಬೇರೆ ಬೇರೆ ಸಂಗತಿಗಳನ್ನು ಹೇಳಿದರು.

57ನಂತರ ಕೆಲವು ಜನರು ನಿಂತುಕೊಂಡು, ಯೇಸುವಿನ
ವಿರುದ್ಧ ಕೆಲವು ಅಪವಾದಗಳನ್ನು ಹೊರಿಸುತ್ತಾ 58‘‘ಈ
ಮನುಷ್ಯನು, ‘ಕೈಯಿಂದ ಕಟ್ಟಿದ ಈ ದೇವಾಲಯವನ್ನು ಕೆಡವಿ
ಮೂರು ದಿನಗಳಲ್ಲಿ ಕೈಯಿಂದ ಕಟ್ಟಿಲ್ಲದ ಇನ್ನೊಂದು

---

**ಅಪ್ಪಾ** ಮೂಲ ಪದ ಅರಮೇಯಿಕ್ ಭಾಷೆಯ ‘‘ಅಬ್ಬಾ’’ ಇದರರ್ಥ ‘‘ಅಪ್ಪಾ.’’

ದೇವಾಲಯವನ್ನು ಕಟ್ಟುತ್ತೇನೆ’ ಎಂದು ಹೇಳಿದ್ದನ್ನು ನಾವು
ಕೇಳಿದೆವು’’ ಎಂದರು. 59ಆದರೂ ಈ ಜನರು ಹೇಳಿದ
ಸಂಗತಿಗಳು ಹೊಂದಿಕೆಯಾಗಲಿಲ್ಲ.

60ಆಗ ಪ್ರಧಾನಯಾಜಕನು ಎಲ್ಲಾ ಜನರೆದುರಿಗೆ ಎದ್ದು
ನಿಂತು, ಯೇಸುವಿಗೆ ‘‘ಈ ಜನರು ನಿನಗೆ ವಿರುದ್ಧವಾಗಿ
ಹೊರಿಸುತ್ತಿರುವ ಈ ಆರೋಪಗಳ ಬಗ್ಗೆ ನೀನು ಏನಾದರೂ
ಹೇಳಬೇಕೆಂದಿರುವೆಯೋ? ಜನರು ಹೇಳುತ್ತಿರುವುದು
ನಿಜವೇ?’’ ಎಂದು ಕೇಳಿದನು. 61ಆದರೆ ಯೇಸು ಮೌನ
ವಾಗಿದ್ದನು. ಯಾವ ಉತ್ತರವನ್ನೂ ಕೊಡಲಿಲ್ಲ.

ಪ್ರಧಾನಯಾಜಕನು ಯೇಸುವಿಗೆ, ‘‘ಮಹಾದೇವರ
ಮಗನಾದ ಕ್ರಿಸ್ತನು ನೀನೊ?’’ ಎಂಬ ಇನ್ನೊಂದು ಪ್ರಶ್ನೆಯನ್ನು
ಕೇಳಿದನು. 62ಯೇಸು, ‘‘ಹೌದು, ನಾನೇ ದೇವರ ಮಗನು.
ಮನುಷ್ಯಕುಮಾರನು ದೇವರ ಬಲಗಡೆಯಲ್ಲಿ ಕುಳಿತಿರುವು
ದನ್ನೂ ಆಕಾಶದ ಮೇಘಗಳ ಮೇಲೆ ಬರುವುದನ್ನೂ ನೀನು
ಕಾಣುವೆ’’ ಎಂದು ಉತ್ತರಿಸಿದನು.

63ಪ್ರಧಾನಯಾಜಕನು ಬಹಳ ಕೋಪದಿಂದ ತನ್ನ
ಬಟ್ಟೆಗಳನ್ನು ಹರಿದುಕೊಂಡು, ‘‘ನಮಗೆ ಇನ್ನೂ ಹೆಚ್ಚಿನ ಸಾಕ್ಷಿ
ಗಳ ಅವಶ್ಯಕತೆಯಿಲ್ಲ! 64ಇವನು ದೇವರ ವಿರುದ್ಧವಾಗಿ ಹೇಳಿದ
ಮಾತನ್ನು ನೀವೆಲ್ಲರೂ ಕೇಳಿದ್ದೀರಿ. ನಿಮ್ಮ ಅಭಿಪ್ರಾಯ
ವೇನು?’’ ಎಂದು ಕೇಳಿದನು.

ಯೇಸು ಅಪರಾಧಿಯೆಂತಲೂ ಆತನಿಗೆ ಮರಣ ದಂಡನೆ
ಆಗಬೇಕೆಂತಲೂ ಜನರೆಲ್ಲರು ಹೇಳಿದರು. 65ಅಲ್ಲಿದ್ದ ಕೆಲವು
ಜನರು ಯೇಸುವಿಗೆ ಉಗುಳಿ, ಆತನ ಮುಖವನ್ನು ಮುಚ್ಚಿ,
ಮುಷ್ಠಿಯಿಂದ ಗುದ್ದಿ, ‘‘ನಮಗೆ ಪ್ರವಾದನೆ ಹೇಳು’’ ಎಂದರು.
ನಂತರ ಕಾವಲುಗಾರರು ಯೇಸುವನ್ನು ದೂರ ಕರೆದು
ಕೊಂಡುಹೋಗಿ, ಆತನನ್ನು ಹೊಡೆದರು.

## ಪೇತ್ರನ ವಿಶ್ವಾಸದ್ರೋಹ

(ಮತ್ತಾಯ 26:69-75; ಲೂಕ 22:56-62;
ಯೋಹಾನ 18:15-18; 25-27)

66ಆ ಸಮಯದಲ್ಲಿ ಪೇತ್ರನು ಇನ್ನೂ ಅಂಗಳದಲ್ಲಿದ್ದನು.
ಪ್ರಧಾನಯಾಜಕನ ದಾಸಿಯಾಗಿದ್ದ ಹುಡುಗಿಯೊಬ್ಬಳು
ಪೇತ್ರನ ಬಳಿಗೆ ಬಂದಳು. 67ಪೇತ್ರನು ಬೆಂಕಿಯ ಹತ್ತಿರ ಚಳಿ
ಕಾಯಿಸಿಕೊಳ್ಳುತ್ತಿರುವುದನ್ನು ಅವಳು ಕಂಡು, ಪೇತ್ರನನ್ನು
ಹತ್ತಿರದಿಂದ ದಿಟ್ಟಿಸಿ ನೋಡಿ, ‘‘ನೀನು ನಜರೇತಿನವನಾದ
ಯೇಸುವಿನ ಜೊತೆ ಇದ್ದವನಲ್ಲವೇ?’’ ಎಂದಳು.

68ಆದರೆ ಪೇತ್ರನು ಆಕೆಯ ಮಾತನ್ನು ನಿರಾಕರಿಸಿ, ‘‘ನೀನು
ಏನು ಹೇಳುತ್ತಿರುವೆಯೋ ನನಗೆ ತಿಳಿಯದು’’ ಎಂದು ಹೇಳಿ
ಎದ್ದು, ಅಂಗಳದ ಪ್ರವೇಶದ್ವಾರದ ಬಳಿಗೆ ಹೋದನು.

69ಪೇತ್ರನು ಅಲ್ಲಿರುವುದನ್ನು ಆ ದಾಸಿಯು ನೋಡಿ, ಅಲ್ಲಿ
ನಿಂತಿದ್ದ ಜನರಿಗೆ, ‘‘ಈ ಮನುಷ್ಯನು ಯೇಸುವನ್ನು ಹಿಂಬಾ
ಲಿಸಿದ ಜನರಲ್ಲಿ ಒಬ್ಬನು’’ ಎಂದು ಹೇಳಿದಳು.70ಪುನಃ ಪೇತ್ರನು
ಆಕೆಯ ಮಾತನ್ನು ನಿರಾಕರಿಸಿದನು.

ಸ್ವಲ್ಪ ಸಮಯದ ನಂತರ, ಪೇತ್ರನ ಬಳಿ ನಿಂತಿದ್ದ ಕೆಲವು
ಜನರು ಅವನಿಗೆ, ‘‘ಯೇಸುವನ್ನು ಹಿಂಬಾಲಿಸಿದ ಜನರಲ್ಲಿ
ನೀನೂ ಒಬ್ಬನು ಎಂಬುದು ನಮಗೆ ತಿಳಿದಿದೆ. ನೀನು ಯೇಸುವಿ
ನಂತೆ ಗಲಿಲೇಯದವನು’’ ಎಂದರು.

71ಆಗ ಪೇತ್ರನು ತನಗೆ ಶಾಪ ಹಾಕಿಕೊಳ್ಳುತ್ತಾ ‘‘ದೇವರ
ಮೇಲೆ ಆಣೆಯಿಟ್ಟು ಹೇಳುತ್ತೇನೆ, ನೀವು ಹೇಳುತ್ತಿರುವ ಈ
ಮನುಷ್ಯನನ್ನು ನಾನು ತಿಳಿದಿಲ್ಲ!’’ ಎಂದು ಬಲವಾಗಿ
ಹೇಳಿದನು.

72ಪೇತ್ರನು ಇದನ್ನು ಹೇಳಿದ ಮೇಲೆ ಕೋಳಿ ಎರಡನೇ ಸಾರಿ
ಕೂಗಿತು. ‘‘ಕೋಳಿ ಎರಡು ಸಾರಿ ಕೂಗುವುದಕ್ಕಿಂತ ಮುಂಚೆ,
ನೀನು ನನ್ನನ್ನು ತಿಳಿದಿಲ್ಲವೆಂದು ಮೂರು ಸಾರಿ ಹೇಳುವೆ’’
ಎಂದು ಯೇಸು ತನಗೆ ಹೇಳಿದ್ದನ್ನು ಪೇತ್ರನು ಜ್ಞಾಪಿಸಿಕೊಂಡು
ಬಹಳ ದುಃಖದಿಂದ ಗೋಳಾಡಿದನು.

## ಪಿಲಾತನಿಂದ ಯೇಸುವಿನ ವಿಚಾರಣೆ

(ಮತ್ತಾಯ 27:1-2, 11-14; ಲೂಕ 23:1-5; ಯೋಹಾನ 18:28-38)

15 ಮುಂಜಾನೆ ನಸುಕಿನಲ್ಲೇ, ಮಹಾಯಾಜಕರು,
ಹಿರಿಯ ಯೆಹೂದ್ಯನಾಯಕರು, ಧರ್ಮೋಪ
ದೇಶಕರು ಮತ್ತು ಯೆಹೂದ್ಯ ಸಮಿತಿಯವರು ಸಭೆ ಸೇರಿ
ಯೇಸುವಿಗೆ ಮಾಡಬೇಕಾದದ್ದನ್ನು ನಿರ್ಧರಿಸಿದರು. ಅವರು
ಯೇಸುವನ್ನು ಬಂಧಿಸಿ, ರಾಜ್ಯಪಾಲನಾದ ಪಿಲಾತನ ಬಳಿಗೆ
ಕರೆದುಕೊಂಡು ಹೋಗಿ ಅವನಿಗೆ ಒಪ್ಪಿಸಿದರು.

2ಪಿಲಾತನು ಯೇಸುವಿಗೆ, ‘‘ನೀನು ಯೆಹೂದ್ಯರ
ರಾಜನೋ?’’ ಎಂದು ಕೇಳಿದನು.

ಯೇಸು, ‘‘ಹೌದು, ನೀನು ಹೇಳಿದ್ದು ಸರಿ’’ ಎಂದು
ಉತ್ತರಿಸಿದನು.

3ಮಹಾಯಾಜಕರು ಯೇಸುವಿನ ಮೇಲೆ ಅನೇಕ
ತಪ್ಪುಗಳನ್ನು ಹೊರಿಸಿದರು.4ಆದ್ದರಿಂದ ಪಿಲಾತನು ಯೇಸುವಿಗೆ
ಮತ್ತೊಮ್ಮೆ, ‘‘ಈ ಜನರು ನಿನ್ನ ಮೇಲೆ ಅನೇಕ ಅಪರಾಧಗಳನ್ನು
ಹೊರಿಸುತ್ತಿದ್ದರೂ ನೀನು ಏಕೆ ಉತ್ತರಿಸುವುದಿಲ್ಲ?’’ ಎಂದು
ಕೇಳಿದನು. 5ಆದರೆ ಯೇಸು ಮೌನವಾಗಿದ್ದನು. ಪಿಲಾತನಿಗೆ
ಇದರಿಂದ ಬಹಳ ಆಶ್ಚರ್ಯವಾಯಿತು.

## ಯೇಸುವನ್ನು ಬಿಡಿಸಲು ಪಿಲಾತನು ಮಾಡಿದ ವಿಫಲ ಪ್ರಯತ್ನ

(ಮತ್ತಾಯ 27:15-31; ಲೂಕ 23:13-25; ಯೋಹಾನ18:39-19:16)

6ಪ್ರತಿ ವರ್ಷವೂ ಪಸ್ಕಹಬ್ಬದ ಸಮಯದಲ್ಲಿ ಜನರು
ಬಯಸಿದ ಕೈದಿಯನ್ನು ರಾಜ್ಯಪಾಲನು ಸೆರೆಮನೆಯಿಂದ
ಬಿಡುಗಡೆ ಮಾಡುತ್ತಿದ್ದನು. 7ಆ ಸಮಯದಲ್ಲಿ ಬರಬ್ಬ
ಎಂಬವನು ದಂಗೆಕೋರರೊಂದಿಗೆ ಸೆರೆಮನೆಯಲ್ಲಿದ್ದನು. ಈ
ದಂಗೆಕೋರರು ಒಂದು ಗಲಭೆಯ ಸಮಯದಲ್ಲಿ ಕೊಲೆ
ಮಾಡಿದ ಆಪಾದನೆಗೆ ಗುರಿಯಾಗಿದ್ದರು. 8ಜನರು ಪಿಲಾತನ
ಬಳಿಗೆ ಬಂದು, ಎಂದಿನಂತೆ ತಮಗಾಗಿ ಒಬ್ಬ ಕೈದಿಯನ್ನು
ಬಿಡುಗಡೆ ಮಾಡಬೇಕೆಂದು ಕೇಳಿದರು.

9ಪಿಲಾತನು ಜನರಿಗೆ, ‘‘ನಾನು ಯೆಹೂದ್ಯರ ರಾಜನನ್ನು
ಬಿಡುಗಡೆ ಮಾಡಬೇಕೆಂದು ಬಯಸುತ್ತೀರಾ?’’ ಎಂದು
ಕೇಳಿದನು.

10ಮಹಾಯಾಜಕರು ಹೊಟ್ಟೆಕಿಚ್ಚಿನಿಂದ ಯೇಸುವನ್ನು
ಬಂಧಿಸಿ ತನಗೆ ಒಪ್ಪಿಸಿದ್ದಾರೆಂಬುದು ಪಿಲಾತನಿಗೆ ತಿಳಿದಿತ್ತು.
11ಆದರೆ ಯೇಸುವನ್ನು ಬಿಡುಗಡೆ ಮಾಡದೆ ಬರಬ್ಬನನ್ನು
ಬಿಡುಗಡೆ ಮಾಡುವಂತೆ ಪಿಲಾತನನ್ನು ಕೇಳಿಕೊಳ್ಳಬೇಕೆಂದು
ಮಹಾಯಾಜಕರು ಜನರನ್ನು ಪ್ರೇರೇಪಿಸಿದರು.

12ಪಿಲಾತನು ಜನರಿಗೆ ಮತ್ತೆ ‘‘ಯೆಹೂದ್ಯರ ರಾಜನೆಂದು ನೀವು ಕರೆಯುವ ಈ ಮನುಷ್ಯನನ್ನು ನಾನೇನು ಮಾಡಲಿ?’’ ಎಂದು ಕೇಳಿದನು.

13ಜನರು, ‘‘ಅವನನ್ನು ಶಿಲುಬೆಗೇರಿಸು!’’ ಎಂದು ಆರ್ಭಟಿಸಿದರು. 14ಪಿಲಾತನು, ‘‘ಏಕೆ? ಅವನು ಯಾವ ಅಪರಾಧ ಮಾಡಿದ್ದಾನೆ?’’ ಎಂದು ಕೇಳಿದನು.

ಅದಕ್ಕೆ ಜನರು, ‘‘ಅವನನ್ನು ಶಿಲುಬೆಗೇರಿಸು!’’ ಎಂದು ಜೋರಾಗಿ ಆರ್ಭಟಿಸಿದರು.

15ಪಿಲಾತನು ಜನರನ್ನು ಸಂತೋಷಪಡಿಸಲು ಬಯಸಿ ಅವರಿಗಾಗಿ ಬರಬ್ಬನನ್ನು ಬಿಡುಗಡೆ ಮಾಡಿದನು ಮತ್ತು ಕೊರಡೆಗಳಿಂದ ಹೊಡೆದು ಶಿಲುಬೆಗೇರಿಸುವುದಕ್ಕಾಗಿ ಯೇಸುವನ್ನು ಸೈನಿಕರಿಗೆ ಒಪ್ಪಿಸಿದನು.

16ಪಿಲಾತನ ಸೈನಿಕರು ಯೇಸುವನ್ನು ರಾಜಭವನದ ಅಂಗಳದೊಳಕ್ಕೆ ಕೊಂಡೊಯ್ದು ಇತರ ಸೈನಿಕರನ್ನೆಲ್ಲಾ ಒಟ್ಟಿಗೆ ಕರೆದರು. 17ಸೈನಿಕರು ಯೇಸುವಿನ ಮೇಲೆ ಕಡುಕೆಂಪಾದ ನಿಲುವಂಗಿಯನ್ನು ಹಾಕಿ ಮುಳ್ಳಿನ ಬಳ್ಳಿಗಳಿಂದ ಒಂದು ಕಿರೀಟ ಮಾಡಿ ಯೇಸುವಿನ ತಲೆಯ ಮೇಲೆ ಇಟ್ಟರು. 18ನಂತರ ಅವರು ಯೇಸುವಿಗೆ, ‘‘ಯೆಹೂದ್ಯರ ಅರಸನೇ, ನಿನಗೆ ನಮಸ್ಕಾರ!’’ ಎಂದರು. 19ಸೈನಿಕರು ಆತನ ತಲೆಯ ಮೇಲೆ ಅನೇಕ ಸಾರಿ ಬೆತ್ತದಿಂದ ಹೊಡೆದು ಆತನ ಮೇಲೆ ಉಗುಳಿದರು. ನಂತರ ಅವರು ಯೇಸುವಿನ ಮುಂದೆ ಮೊಣಕಾಲೂರಿ, ಆತನನ್ನು ಆರಾಧಿಸುವಂತೆ ನಟಿಸುತ್ತಾ ಪರಿಹಾಸ್ಯ ಮಾಡಿದರು. 20ಆ ಬಳಿಕ ಸೈನಿಕರು ಕಡುಕೆಂಪಾದ ನಿಲುವಂಗಿಯನ್ನು ತೆಗೆದುಬಿಟ್ಟು, ಆತನ ಬಟ್ಟೆಗಳನ್ನೇ ಮತ್ತೆ ತೊಡಿಸಿದರು. ನಂತರ ಅವರು ಯೇಸುವನ್ನು ಶಿಲುಬೆಗೇರಿಸಲು ಕರೆದುಕೊಂಡು ಹೋದರು.

## ಶಿಲುಬೆಗೇರಿಸಲ್ಪಟ್ಟ ಯೇಸು

(ಮತ್ತಾಯ 27:32-44; ಲೂಕ 23:26-43; ಯೋಹಾನ 19-17-27)

21ಆಗ ಸಿರೇನ್ ಪಟ್ಟಣದ ಸಿಮೋನ ಎಂಬವನು ಹೊಲದಿಂದ ಬರುತ್ತಿದ್ದನು. ಅವನು ಅಲೆಕ್ಸಾಂಡರ್ ಮತ್ತು ರೂಫಸ್ ಎಂಬವರ ತಂದೆ. ಸೈನಿಕರು ಯೇಸುವಿನ ಶಿಲುಬೆಯನ್ನು ಹೊರುವಂತೆ ಸಿಮೋನನನ್ನು ಬಲವಂತ ಮಾಡಿದರು. 22ಅವರು ಯೇಸುವನ್ನು ಗೊಲ್ಗೊಥ ಎಂಬ ಸ್ಥಳಕ್ಕೆ ಕರೆದುಕೊಂಡು ಹೋದರು. (ಗೊಲ್ಗೊಥ ಎಂದರೆ ‘ಕಪಾಲ ಸ್ಥಳ’).

23ಗೊಲ್ಗೊಥದಲ್ಲಿ ಸೈನಿಕರು ಯೇಸುವಿಗೆ ರಕ್ತಬೋಳ ಮಿಶ್ರಿತವಾದ ದ್ರಾಕ್ಷಾರಸವನ್ನು ಕುಡಿಯಲು ಕೊಟ್ಟರು. ಆದರೆ ಯೇಸು ಅದನ್ನು ಕುಡಿಯಲಿಲ್ಲ. 24ಸೈನಿಕರು ಯೇಸುವನ್ನು ಶಿಲುಬೆಗೆ ನೇತುಹಾಕಿ, ಮೊಳೆಗಳನ್ನು ಜಡಿದರು. ನಂತರ ಸೈನಿಕರು ಚೀಟಿಹಾಕಿ ಯೇಸುವಿನ ಬಟ್ಟೆಗಳನ್ನು ತಮ್ಮಲ್ಲಿ ಹಂಚಿ ಕೊಂಡರು.

25ಅವರು ಯೇಸುವನ್ನು ಶಿಲುಬೆಗೇರಿಸಿದಾಗ ಬೆಳಿಗ್ಗೆ ಒಂಭತ್ತು ಗಂಟೆಯಾಗಿತ್ತು. 26ಯೇಸುವಿನ ವಿರುದ್ಧ ಮಾಡಲಾದ ಆಪಾದನೆಯನ್ನು ಅಂದರೆ ‘‘ಯೆಹೂದ್ಯರ ರಾಜ’’ ಎಂದು ಶಿಲುಬೆಯ ಮೇಲೆ ಬರೆಯಲಾಗಿತ್ತು. 27ಅಲ್ಲದೆ ಅವರು ಯೇಸುವಿನ ಪಕ್ಕದಲ್ಲಿ ಇಬ್ಬರು ಕಳ್ಳರನ್ನು ಶಿಲುಬೆಗೆ ಹಾಕಿದ್ದರು. ಅವರು ಒಬ್ಬ ಕಳ್ಳನನ್ನು ಯೇಸುವಿನ ಬಲಗಡೆಯಲ್ಲಿಯೂ ಇನ್ನೊಬ್ಬ ಕಳ್ಳನನ್ನು ಯೇಸುವಿನ ಎಡಗಡೆಯಲ್ಲಿಯೂ ಹಾಕಿದ್ದರು. 28* 29ಅಲ್ಲಿ ನಡೆದು ಹೋಗುತ್ತಿದ್ದವರು ತಮ್ಮ ತಲೆಯಾಡಿಸುತ್ತಾ, ‘‘ನೀನು ದೇವಾಲಯವನ್ನು ಕೆಡವಿ, ಅದನ್ನು ಮತ್ತೆ ಮೂರು ದಿನಗಳಲ್ಲಿ ಕಟ್ಟುತ್ತೇನೆಂದು ಹೇಳಿದೆ. 30ಈಗ ಶಿಲುಬೆಯಿಂದ ಕೆಳಗಿಳಿದು ಬಂದು ನಿನ್ನನ್ನು ರಕ್ಷಿಸಿಕೊ!’’ ಎಂದು ಅಪಹಾಸ್ಯ ಮಾಡಿದರು. 31ಅಲ್ಲಿದ್ದ ಮಹಾಯಾಜಕರು ಹಾಗೂ ಧರ್ಮೋಪದೇಶಕರು ಸಹ, ‘‘ಅವನು ಇತರ ಜನರನ್ನು ರಕ್ಷಿಸಿದನು. ಆದರೆ ತನ್ನನ್ನು ತಾನೇ ರಕ್ಷಿಸಿಕೊಳ್ಳಲಾರನು. 32ಅವನು ನಿಜವಾಗಲೂ ಇಸ್ರೇಲರ ರಾಜನಾದ ಕ್ರಿಸ್ತನಾಗಿದ್ದರೆ, ಈಗ ಶಿಲುಬೆಯಿಂದ ಕೆಳಗಿಳಿದುಬಂದು ತನ್ನನ್ನು ತಾನೇ ರಕ್ಷಿಸಿಕೊಳ್ಳಲಿ. ಆಗ ನಾವು ಅವನನ್ನು ನಂಬುತ್ತೇವೆ’’ ಎಂದು ಅಪಹಾಸ್ಯ ಮಾಡಿದರು. ಯೇಸುವಿನ ಪಕ್ಕದ ಶಿಲುಬೆಗಳಿಗೆ ಹಾಕಲ್ಪಟ್ಟಿದ್ದ ಕಳ್ಳರು ಸಹ ಆತನನ್ನು ಗೇಲಿಮಾಡಿದರು.

## ಯೇಸುವಿನ ಮರಣ

(ಮತ್ತಾಯ 27:45-56; ಲೂಕ 23:44-49;ಯೋಹಾನ 19:28-30)

33ಮಧ್ಯಾಹ್ನವಾದಾಗ, ಇಡೀ ದೇಶವೇ ಕತ್ತಲಾಯಿತು. ಈ ಕತ್ತಲೆಯು ಸಾಯಂಕಾಲ ಮೂರು ಗಂಟೆಯವರೆಗೆ ಇತ್ತು. 34ಮೂರು ಗಂಟೆಗೆ, ಯೇಸು ದೊಡ್ಡ ಧ್ವನಿಯಿಂದ, ‘‘ಎಲೋಹಿ, ಎಲೋಹಿ, ಲಮಾ ಸಬಕ್ತಾನಿ?’’ ಎಂದು ಕೂಗಿದನು. ‘‘ನನ್ನ ದೇವರೇ, ನನ್ನ ದೇವರೇ, ಯಾಕೆ ನನ್ನನ್ನು ಕೈಬಿಟ್ಟೇ?’ * ಎಂಬುದೇ ಇದರರ್ಥ. 35ಅಲ್ಲಿ ನಿಂತಿದ್ದ ಕೆಲವು ಜನರು ಇದನ್ನು ಕೇಳಿ, ‘‘ನೋಡಿ! ಆತನು ಎಲೀಯನನ್ನು ಕರೆಯುತ್ತಿದ್ದಾನೆ’’ ಎಂದರು.

36ಅಲ್ಲಿದ್ದ ಒಬ್ಬನು ಓಡಿಹೋಗಿ, ಸ್ಪಂಜನ್ನು ತೆಗೆದುಕೊಂಡು ಅದನ್ನು ಹುಳಿರಸದಿಂದ ತುಂಬಿಸಿ, ಒಂದು ಕೋಲಿಗೆ ಕಟ್ಟಿ ಯೇಸುವಿಗೆ ಕುಡಿಯಲು ಕೊಡುತ್ತಾ, ಎಲೀಯನು ಇವನನ್ನು ಶಿಲುಬೆಯಿಂದ ಕೆಳಗಿಳಿಸಲು ಬರಬಹುದೇನೋ ನಾವು ಕಾಯ್ದುನೋಡಬೇಕು’’ ಎಂದನು.

37ನಂತರ ಯೇಸು ಮಹಾಧ್ವನಿಯಿಂದ ಕೂಗಿ, ಪ್ರಾಣಬಿಟ್ಟನು. 38ಆಗ ದೇವಾಲಯದ ತೆರೆಯು ಮೇಲಿನಿಂದ ಕೆಳಗಿನವರೆಗೂ ಎರಡು ಭಾಗಗಳಾಗಿ ಹರಿದು ಹೋಯಿತು. 39ಶಿಲುಬೆಯ ಮುಂದೆ ನಿಂತಿದ್ದ ಸೈನ್ಯದ ಅಧಿಕಾರಿಯು ಯೇಸು ಪ್ರಾಣಬಿಟ್ಟಾಗ ನಡೆದದ್ದನ್ನು ನೋಡಿ, ‘‘ಈ ಮನುಷ್ಯನು ನಿಜವಾಗಿಯೂ ದೇವರ ಮಗನು’’ ಎಂದನು.

40ಕೆಲವು ಸ್ತ್ರೀಯರು ಶಿಲುಬೆಯಿಂದ ದೂರದಲ್ಲಿ ನಿಂತುಕೊಂಡು ನೋಡುತ್ತಾ ಇದ್ದರು. ಈ ಸ್ತ್ರೀಯರಲ್ಲಿ ಕೆಲವರೆಂದರೆ, ಮಗ್ದಲದ ಮರಿಯಳು, ಸಲೋಮೆ ಮತ್ತು ಯಾಕೋಬ ಯೋಸೆಯರ ತಾಯಿಯಾದ ಮರಿಯಳು (ಯಾಕೋಬನು ಅವಳ ಕಿರಿಯ ಮಗ.) 41ಈ ಸ್ತ್ರೀಯರು ಗಲಿಲೇಯದಲ್ಲಿ ಯೇಸುವನ್ನು ಹಿಂಬಾಲಿಸಿ ಆತನ ಸೇವೆ ಮಾಡಿದವರು. ಯೇಸುವಿನೊಡನೆ ಜೆರುಸಲೇಮಿಗೆ ಬಂದಿದ್ದ ಇನ್ನೂ ಅನೇಕ ಸ್ತ್ರೀಯರು ಅಲ್ಲಿದ್ದರು.

---

**ವಚನ 28** ಕೆಲವು ಗ್ರೀಕ್ ಪ್ರತಿಗಳಲ್ಲಿ ಈ ವಚನವನ್ನು ಸೇರಿಸಿದ್ದಾರೆ: ‘‘ಆತನು ಅಧರ್ಮಿಗಳ ಸಂಗಡ ಎಣಿಸಲ್ಪಟ್ಟನು ಎಂಬ ಶಾಸ್ತ್ರವಚನವು ಹೀಗೆ ನೆರವೇರಿತು.’’

**ನನ್ನ … ಕೈಬಿಟ್ಟೆ** ಕೀರ್ತನೆ 22:1.

### ಯೇಸುವಿನ ಸಮಾಧಿ
(ಮತ್ತಾಯ 27:57-61; ಲೂಕ 23:50-56; ಯೋಹಾನ 19:38-42)

42ಆಗ ಕತ್ತಲಾಗತೊಡಗಿತ್ತು. ಅಂದು ಸಿದ್ಧತೆಯ
ದಿನವಾಗಿದ್ದರಿಂದ (ಅಂದರೆ ಸಬ್ಬತ್ತಿನ ಹಿಂದಿನ ದಿನ),
43ಅರಿಮಥಾಯ ಊರಿನ ಯೋಸೇಫ ಎಂಬವನು ಪಿಲಾತನ
ಬಳಿಗೆ ಹೋಗಿ, ಯೇಸುವಿನ ದೇಹವನ್ನು ತನಗೆ ಕೊಡ
ಬೇಕೆಂದು ಧೈರ್ಯದಿಂದ ಕೇಳಿದನು. ಯೋಸೇಫನು
ಯೆಹೂದ್ಯರ ಸಮಿತಿಯಲ್ಲಿ ಒಬ್ಬ ಮುಖ್ಯ ಸದಸ್ಯನಾಗಿದ್ದನು.
ದೇವರ ರಾಜ್ಯ ಬರಲೆಂದು ಬಯಸಿದ ಜನರಲ್ಲಿ ಇವನೂ
ಒಬ್ಬನಾಗಿದ್ದನು. 44ಯೇಸು ಇಷ್ಟು ಬೇಗನೆ ಸತ್ತದ್ದನ್ನು ಕೇಳಿ
ಪಿಲಾತನಿಗೆ ಆಶ್ಚರ್ಯವಾಯಿತು. ಯೇಸುವನ್ನು ಕಾವಲು
ಕಾಯುತ್ತಿದ್ದ ಸೈನ್ಯಾಧಿಕಾರಿಯನ್ನು ಪಿಲಾತನು ಕರೆದು,
‘‘ಯೇಸು ಸತ್ತುಹೋದನೇ?’’ ಎಂದು ಕೇಳಿದನು. 45ಆ
ಅಧಿಕಾರಿಯು, ‘‘ಹೌದು’’ ಎಂದು ಹೇಳಿದ್ದರಿಂದ ಆತನ
ದೇಹವನ್ನು ತೆಗೆದುಕೊಳ್ಳಲು ಪಿಲಾತನು ಯೋಸೇಫನಿಗೆ ಅಪ್ಪಣೆ
ಕೊಟ್ಟನು. 46ಯೋಸೇಫನು ನಾರುಬಟ್ಟೆಯನ್ನು ತೆಗೆದು
ಕೊಂಡು ಬಂದು, ಶಿಲುಬೆಯಿಂದ ದೇಹವನ್ನು ಇಳಿಸಿ, ಅದನ್ನು
ಆ ಬಟ್ಟೆಯಿಂದ ಸುತ್ತಿದನು. ಅನಂತರ, ಬಂಡೆಯ ಸಮಾಧಿ
ಯಲ್ಲಿ ಅದನ್ನಿರಿಸಿ ಆ ಸಮಾಧಿಯ ಬಾಗಿಲಿಗೆ ದೊಡ್ಡ ಬಂಡೆ
ಯನ್ನು ಉರುಳಿಸಿ ಮುಚ್ಚಿದನು. 47ಮಗ್ದಲದ ಮರಿಯಳು
ಹಾಗೂ ಯೋಸೆಯನ ತಾಯಿಯಾದ ಮರಿಯಳು ಸಮಾಧಿ
ಮಾಡಿದ ಸ್ಥಳವನ್ನು ಗುರುತಿಸಿಕೊಂಡರು.

### ಯೇಸುವಿನ ಪುನರುತ್ಥಾನ
(ಮತ್ತಾಯ 28:1-8; ಲೂಕ 24:1-12; ಯೋಹಾನ 20:1-10)

16 ಸಬ್ಬತ್ ದಿನದ ಮರುದಿನ, ಮಗ್ದಲದ ಮರಿಯಳು,
ಸಲೋಮೆ ಮತ್ತು ಯಾಕೋಬನ ತಾಯಿಯಾದ
ಮರಿಯಳು ಕೆಲವು ಸುಗಂಧ ದ್ರವ್ಯಗಳನ್ನು ಯೇಸುವಿನ ದೇಹಕ್ಕೆ
ಹಚ್ಚಬೇಕೆಂದಿದ್ದರು. 2ವಾರದ ಮೊದಲನೆಯ ದಿನ,
ಮುಂಜಾನೆಯಲ್ಲಿಯೇ, ಅವರು ಸಮಾಧಿಗೆ ಹೊರಟರು. ಆಗ
ಸೂರ್ಯೋದಯವಾಗಿದ್ದರೂ ಇನ್ನೂ ನಸುಕಾಗಿತ್ತು. 3ಆ
ಸ್ತ್ರೀಯರು ಒಬ್ಬರಿಗೊಬ್ಬರು, ‘‘ದೊಡ್ಡ ಬಂಡೆಯಿಂದ
ಸಮಾಧಿಯ ಬಾಗಿಲನ್ನು ಮುಚ್ಚಲಾಗಿದೆ. ಈ ಬಂಡೆಯನ್ನು
ನಮಗಾಗಿ ಯಾರು ಉರುಳಿಸುತ್ತಾರೆ?’’ ಎಂದುಕೊಂಡರು.

4ಆ ಸ್ತ್ರೀಯರು ಸಮಾಧಿಯನ್ನು ತಲುಪಿದಾಗ ಆ ಬಂಡೆ
ಉರುಳಿರುವುದನ್ನು ಕಂಡರು. ಆ ಬಂಡೆಯು ಬಹಳ ದೊಡ್ಡ
ದಾಗಿತ್ತು. ಆದರೆ ಅದನ್ನು ಬಾಗಿಲಿನಿಂದ ದೂರಕ್ಕೆ ಉರುಳಿಸ
ಲಾಗಿತ್ತು. 5ಆ ಸ್ತ್ರೀಯರು ಸಮಾಧಿಯೊಳಗೆ ಹೋದಾಗ
ಬಿಳುಪಾದ ನಿಲುವಂಗಿ ಧರಿಸಿದ್ದ ಒಬ್ಬ ಯುವಕನು ಸಮಾಧಿಯ
ಬಲಗಡೆ ಕುಳಿತಿರುವುದನ್ನು ಕಂಡು ಭಯಗೊಂಡರು.

6ಆದರೆ, ಅವನು, ‘‘ಭಯಪಡಬೇಡಿ! ಶಿಲುಬೆಗೇರಿಸಲ್ಪಟ್ಟ
ನಜರೇತಿನ ಯೇಸುವನ್ನು ನೀವು ಹುಡುಕುತ್ತಿದ್ದೀರಲ್ಲವೇ?
ಆತನು ಜೀವಂತವಾಗಿ ಎದ್ದಿದ್ದಾನೆ. ಆತನು ಇಲ್ಲಿಲ್ಲ. ನೋಡಿರಿ,
ಆತನ ದೇಹವನ್ನು ಇಟ್ಟಿದ್ದ ಸ್ಥಳ ಇದೇ. 7ಈಗ ಹೋಗಿ ಆತನ
ಶಿಷ್ಯರಿಗೆ ತಿಳಿಸಿರಿ. ಪೇತ್ರನಿಗಂತೂ ಖಂಡಿತವಾಗಿ ತಿಳಿಸಿರಿ. ನೀವು
ಅವರಿಗೆ, ‘ಯೇಸು ಗಲಿಲೇಯಕ್ಕೆ ಹೋಗುತ್ತಿದ್ದಾನೆ. ಆತನು
ನಿಮಗಿಂತ ಮುಂಚೆ ಅಲ್ಲಿರುತ್ತಾನೆ. ಆತನು ನಿಮಗೆ ಮೊದಲೇ
ಹೇಳಿದಂತೆ ನೀವು ಆತನನ್ನು ಅಲ್ಲಿ ನೋಡುವಿರಿ’ ಎಂದು
ಹೇಳಿರಿ’’ ಎಂದನು. 8ಆ ಸ್ತ್ರೀಯರು ಬಹಳ ಭಯದಿಂದ
ಗಲಿಬಿಲಿಗೊಂಡು, ಸಮಾಧಿಯನ್ನು ಬಿಟ್ಟು ಓಡಿಹೋದರು.
ಅವರು ಬಹಳ ಭಯಗೊಂಡಿದ್ದರಿಂದ ಈ ವಿಷಯವನ್ನು
ಯಾರಿಗೂ ಹೇಳಲಿಲ್ಲ.

---

*(ಕೆಲವು ಗ್ರೀಕ್ ಪ್ರತಿಗಳಲ್ಲಿ ಈ ಸುವಾರ್ತೆಯು ಇಲ್ಲಿಗೇ ಮುಕ್ತಾಯವಾಗುತ್ತದೆ.)*

### ಶಿಷ್ಯರಿಗೆ ಯೇಸುವಿನ ದರ್ಶನ
(ಮತ್ತಾಯ 28:9-10; ಯೋಹಾನ20:11-18; ಲೂಕ 24:13-35)

9ವಾರದ ಮೊದಲನೆಯ ದಿನದ ಬೆಳಿಗ್ಗೆ ಯೇಸು
ಜೀವಂತವಾಗಿ ಎದ್ದನು. ಯೇಸು ಮೊಟ್ಟಮೊದಲು ಮಗ್ದಲದ
ಮರಿಯಳಿಗೆ ಕಾಣಿಸಿಕೊಂಡನು. ಹಿಂದೊಮ್ಮೆ ಯೇಸು
ಮರಿಯಳಿಂದ ಏಳು ದೆವ್ವಗಳನ್ನು ಬಿಡಿಸಿದ್ದನು. 10ಮರಿಯಳು
ಹೋಗಿ ಆತನ ಶಿಷ್ಯರಿಗೆ ತಿಳಿಸಿದಳು. ಅವರಾದರೋ ಇನ್ನೂ
ಶೋಕಭರಿತರಾಗಿ ಅಳುತ್ತಿದ್ದರು. 11ಯೇಸು ಬದುಕಿರುವು
ದಾಗಿಯೂ ತಾನು ಆತನನ್ನು ನೋಡಿದ್ದಾಗಿಯೂ ಮರಿಯಳು
ತಿಳಿಸಿದಾಗ ಶಿಷ್ಯರು ಅವಳನ್ನು ನಂಬಲಿಲ್ಲ. 12ನಂತರ, ಇಬ್ಬರು
ಶಿಷ್ಯರು ಹಳ್ಳಿಯಲ್ಲಿ ನಡೆದುಕೊಂಡು ಹೋಗುತ್ತಿರುವಾಗ,
ಯೇಸು ಅವರಿಗೆ ಬೇರೊಂದು ರೂಪದಲ್ಲಿ ಕಾಣಿಸಿಕೊಂಡನು.
13ಈ ಶಿಷ್ಯರು ಇತರ ಶಿಷ್ಯರ ಬಳಿಗೆ ಹಿಂತಿರುಗಿ, ಈ ವಿಷಯವನ್ನು
ತಿಳಿಸಿದರು. ಆದರೆ ಆ ಶಿಷ್ಯರು ಅವರನ್ನು ನಂಬಲಿಲ್ಲ.

### ಯೇಸು ಮತ್ತು ಅಪೊಸ್ತಲರ ಸಂಭಾಷಣೆ
(ಮತ್ತಾಯ 28:16-20; ಲೂಕ 24:36-49; ಯೋಹಾನ 20:19-23;
ಅಪೊ. ಕೃತ್ಯ. 1:6-8)

14ನಂತರ ಹನ್ನೊಂದು ಜನ ಶಿಷ್ಯರು ಊಟಮಾಡುತ್ತಿರು
ವಾಗ, ಯೇಸು ಅವರಿಗೆ ಕಾಣಿಸಿಕೊಂಡನು. ಶಿಷ್ಯರಲ್ಲಿ ಕೊಂಚ
ನಂಬಿಕೆ ಇದ್ದುದರಿಂದ ಯೇಸು ಅವರನ್ನು ಖಂಡಿಸಿದನು.
ಏಕೆಂದರೆ, ಯೇಸು ಸಾವಿನಿಂದ ಎದ್ದು ಬಂದಿದ್ದಾನೆಂದು
ದೃಢವಾಗಿ ಹೇಳಿದ ಜನರ ಮಾತನ್ನು ಅವರು ನಂಬಲಿಲ್ಲ.

15ಯೇಸು ಶಿಷ್ಯರಿಗೆ, ‘‘ಪ್ರಪಂಚದ ಎಲ್ಲಾ ಕಡೆಗೆ ಹೋಗಿರಿ.
ಪ್ರತಿಯೊಬ್ಬನಿಗೂ ಸುವಾರ್ತೆಯನ್ನು ಹೇಳಿರಿ. 16ನಂಬಿಕೆ
ಯಿಟ್ಟು, ದೀಕ್ಷಾಸ್ನಾನ ಮಾಡಿಸಿಕೊಳ್ಳುವವನು ರಕ್ಷಣೆಹೊಂದು
ವನು. ಆದರೆ ನಂಬದವನು ಅಪರಾಧಿ ಎಂಬ ನಿರ್ಣಯ
ಹೊಂದುವನು. 17ನಂಬುವವರಾದರೋ ಅದ್ಭುತಕಾರ್ಯ
ಗಳನ್ನು ಮಾಡುವರು. ಅವರು ನನ್ನ ಹೆಸರಿನ ಮೂಲಕ ದೆವ್ವ
ಗಳನ್ನು ಬಿಡಿಸುವರು. ತಾವೆಂದೂ ಕಲಿತಿಲ್ಲದ ಭಾಷೆಗಳಲ್ಲಿ ಮಾತ
ನಾಡುವರು. 18ಅವರು ಹಾವುಗಳನ್ನು ಹಿಡಿದುಕೊಂಡರೂ ಅವು
ಅವರನ್ನು ಕಚ್ಚುವುದಿಲ್ಲ. ವಿಷಕುಡಿದರೂ ಅವರಿಗೆ ಯಾವ
ತೊಂದರೆಯೂ ಆಗುವುದಿಲ್ಲ. ಅವರು ಮುಟ್ಟಿದರೆ ರೋಗಿಗಳು
ಗುಣಹೊಂದುವರು’’ ಎಂದು ಹೇಳಿದನು.

19ಪ್ರಭುವಾದ ಯೇಸು ಈ ಸಂಗತಿಗಳನ್ನು ಶಿಷ್ಯರಿಗೆ ಹೇಳಿದ
ಮೇಲೆ, ಸ್ವರ್ಗದೊಳಗೆ ಒಯ್ಯಲ್ಪಟ್ಟು ದೇವರ ಬಲಗಡೆಯಲ್ಲಿ
ಕುಳಿತುಕೊಂಡನು. 20ಶಿಷ್ಯರು ಪ್ರಪಂಚದ ಎಲ್ಲಾ ಕಡೆಗೆ
ಹೋಗಿ, ಜನರಿಗೆ ಸುವಾರ್ತೆಯನ್ನು ಸಾರಿದರು. ಪ್ರಭುವು
ಅವರೊಂದಿಗೆ ಕಾರ್ಯಸಾಧಿಸುತ್ತಾ ಸೂಚಕ ಕಾರ್ಯಗಳಿಂದ
ಸುವಾರ್ತೆಯ ವಾಕ್ಯವನ್ನು ಬಲಪಡಿಸಿದನು.

# ಲೂಕನ ಸುವಾರ್ತೆ

### ಯೇಸುವಿನ ಜೀವನದ ಬಗ್ಗೆ ಲೂಕನ ಬರಹ

1 ಸನ್ಮಾನ್ಯ ಥೆಯೊಫಿಲನೇ, ನಮ್ಮ ಮಧ್ಯದಲ್ಲಿ ಸಂಭವಿಸಿದ
ಸಂಗತಿಗಳ ಚರಿತ್ರೆಯನ್ನು ತಿಳಿಸುವುದಕ್ಕೆ ಅನೇಕರು
ಪ್ರಯತ್ನಿಸಿದ್ದಾರೆ. 2ಪ್ರಾರಂಭದಿಂದಲೂ ಆ ಸಂಗತಿಗಳನ್ನು
ಕಣ್ಣಾರೆಕಂಡು ದೇವರ ಸಂದೇಶವನ್ನು ಸಾರಿದವರಿಂದ ನಾವು
ಕೇಳಿದ ಸಂಗತಿಗಳನ್ನೇ ಅವರು ಬರೆದಿದ್ದಾರೆ. 3ಪ್ರತಿಯೊಂದು
ಸಂಗತಿಯನ್ನು ಪ್ರಾರಂಭದಿಂದ ನಾನೇ ಶ್ರದ್ಧೆವಹಿಸಿ ಅಧ್ಯಯನ
ಮಾಡಿರುವುದರಿಂದ ಅವೆಲ್ಲವನ್ನೂ ನಿನಗೆ ಕ್ರಮಬದ್ಧವಾಗಿ
ತಿಳಿಸಲು ಪುಸ್ತಕರೂಪದಲ್ಲಿ ಬರೆದಿದ್ದೇನೆ. 4ನಿನಗೆ ಉಪದೇಶಿ
ಸಿರುವ ವಿಷಯಗಳು ಸತ್ಯವಾದವುಗಳೆಂದು ಇದರಿಂದ ನಿನಗೆ
ಸ್ಪಷ್ಟವಾಗಿರುವುದು.

### ಜಕರೀಯ ಮತ್ತು ಎಲಿಜಬೇತ್

5ಹೆರೋದನು* ಜುದೇಯವನ್ನು ಆಳುತ್ತಿದ್ದ ಕಾಲದಲ್ಲಿ
ಜಕರೀಯನೆಂಬ ಒಬ್ಬ ಯಾಜಕನಿದ್ದನು. ಜಕರೀಯನು
ಅಬೀಯನ ವರ್ಗಕ್ಕೆ* ಸೇರಿದವನು. ಜಕರೀಯನ ಹೆಂಡತಿ
ಆರೋನನ ಕುಟುಂಬದವಳು. ಆಕೆಯ ಹೆಸರು ಎಲಿಜಬೇತ್.
6ಜಕರೀಯನು ಮತ್ತು ಎಲಿಜಬೇತಳು ನಿಜವಾಗಿಯೂ ದೇವರ
ದೃಷ್ಟಿಯಲ್ಲಿ ಒಳ್ಳೆಯವರಾಗಿದ್ದರು. ಪ್ರಭುವಿನ (ದೇವರ)
ಆಜ್ಞೆಗಳನ್ನೆಲ್ಲಾ ಕೈಕೊಂಡು ನಡೆಯುತ್ತಿದ್ದ ಅವರು, ಅದೇರೀತಿ
ಬಾಳಲು ಇತರರಿಗೂ ಉಪದೇಶಿಸುತ್ತಿದ್ದರು. ಅವರು ತಪ್ಪಿಲ್ಲ
ದವರಾಗಿದ್ದರು. 7ಅವರಿಗೆ ಮಕ್ಕಳಿರಲಿಲ್ಲ. ಎಲಿಜಬೇತಳು
ಬಂಜೆಯಾಗಿದ್ದಳು; ಮತ್ತು ಅವರಿಬ್ಬರೂ ಬಹಳ ಮುಪ್ಪಿನವ
ರಾಗಿದ್ದರು.

8ಒಮ್ಮೆ ತನ್ನ ವರ್ಗದ ಸರದಿ ಬಂದಾಗ, ಜಕರೀಯನು
ದೇವರ ಸನ್ನಿಧಿಯಲ್ಲಿ ಯಾಜಕಸೇವೆ ಸಲ್ಲಿಸುತ್ತಿದ್ದನು.
9ಯಾಜಕರು ಧೂಪವನ್ನು ಅರ್ಪಿಸುವುದಕ್ಕಾಗಿ ತಮ್ಮ
ಸಂಪ್ರದಾಯದ ಪ್ರಕಾರ ಚೀಟಿಹಾಕಿ ಒಬ್ಬ ಯಾಜಕನನ್ನು
ಆರಿಸುತ್ತಿದ್ದರು. ಈ ಸಲ ಅದು ಜಕರೀಯನ ಪಾಲಿಗೆ ಬಂದಿತು.
ಆದ್ದರಿಂದ ಜಕರೀಯನು ಧೂಪ ಅರ್ಪಿಸುವುದಕ್ಕಾಗಿ ಪ್ರಭು
ವಿನ ಆಲಯದೊಳಗೆ ಹೋದನು. 10ಹೊರಗಡೆ ಬಹು ಜನ
ರಿದ್ದರು. ಧೂಪವನ್ನರ್ಪಿಸುತ್ತಿದ್ದ ಸಮಯದಲ್ಲಿ ಅವರು
ಪ್ರಾರ್ಥಿಸುತ್ತಿದ್ದರು. 11ಆಗ, ಧೂಪಪೀಠದ ಬಲಗಡೆಯಲ್ಲಿ,
ಪ್ರಭುವಿನ ದೂತನೊಬ್ಬನು ಬಂದು ಜಕರೀಯನ ಮುಂದೆ
ನಿಂತನು. 12ಅವನು ದೇವದೂತನನ್ನು ನೋಡಿ ಗಲಿಬಿಲಿ
ಗೊಂಡು ಬಹು ಭಯಪಟ್ಟನು. 13ಆದರೆ ದೇವದೂತನು
ಅವನಿಗೆ, ‘‘ಜಕರೀಯನೇ, ಹೆದರಬೇಡ. ನಿನ್ನ ಪ್ರಾರ್ಥನೆ
ದೇವರಿಗೆ ಕೇಳಿಸಿತು. ನಿನ್ನ ಹೆಂಡತಿಯಾದ ಎಲಿಜಬೇತಳು
ಒಂದು ಗಂಡುಮಗುವನ್ನು ಹೆರುವಳು. ನೀನು ಅವನಿಗೆ
ಯೋಹಾನ ಎಂದು ಹೆಸರಿಡಬೇಕು. 14ಅವನ ಜನನದಿಂದ
ನಿಮಗೆ ಹರ್ಷಾನಂದವಾಗುವುದು. ಬಹು ಜನರು ಸಂತೋಷ
ಪಡುವರು. 15ಪ್ರಭುವಿನ (ದೇವರ) ದೃಷ್ಟಿಯಲ್ಲಿ
ಯೋಹಾನನು ಮಹಾಪುರುಷನಾಗಿರುವನು. ಅವನು ದ್ರಾಕ್ಷಾ
ರಸವನ್ನಾಗಲಿ ಮದ್ಯವನ್ನಾಗಲಿ ಕುಡಿಯುವುದಿಲ್ಲ.
ಯೋಹಾನನು ಹುಟ್ಟಿದಂದಿನಿಂದಲೇ ಪವಿತ್ರಾತ್ಮ* ಭರಿತ
ನಾಗಿರುವನು. 16ಅನೇಕ ಯೆಹೂದ್ಯರು ತಮ್ಮ ದೇವರಾದ
ಪ್ರಭುವಿನ ಕಡೆಗೆ ತಿರುಗಿಕೊಳ್ಳಲು ಅವನು ಸಹಾಯ
ಮಾಡುವನು. 17ಅವನು ಪ್ರಭುವಿಗೆ ಮುಂದೂತನಾಗಿ ಹೋಗು
ವನು. ಅವನು ಎಲೀಯನ* ಗುಣ, ಶಕ್ತಿಗಳಿಂದ ಕೂಡಿದವ
ನಾಗಿರುವನು; ತಂದೆ ಮತ್ತು ಮಕ್ಕಳ ನಡುವೆ ಸಮಾಧಾನವನ್ನು
ಉಂಟುಮಾಡುವನು; ಅವಿಧೇಯರಾದ ಅನೇಕರನ್ನು ನೀತಿ
ವಂತರ ಜ್ಞಾನದ ಕಡೆಗೆ ನಡೆಸುವನು; ಜನರನ್ನು ಪ್ರಭುವಿನ
ಆಗಮನಕ್ಕೆ ಸಿದ್ಧಪಡಿಸುವನು’’ ಎಂದು ಹೇಳಿದನು.

18ಜಕರೀಯನು ದೇವದೂತನಿಗೆ, ‘‘ನೀನು ಹೇಳುತ್ತಿರು
ವುದು ಸತ್ಯವೆಂಬುದಕ್ಕೆ ಆಧಾರವೇನು? ನಾನು ಮುದುಕ
ನಾಗಿದ್ದೇನೆ ಮತ್ತು ನನ್ನ ಹೆಂಡತಿ ಸಹ ಮುಪ್ಪಿನವಳಾಗಿದ್ದಾಳೆ’’
ಎಂದು ಹೇಳಿದನು.

19ದೇವದೂತನು, ‘‘ನನ್ನ ಹೆಸರು ಗಬ್ರಿಯೇಲ. ನಾನು
ದೇವರ ಸನ್ನಿಧಿಯಲ್ಲಿ ನಿಂತುಕೊಂಡಿರುವವನು. ನಿನಗೆ ಈ ಶುಭ
ಸಮಾಚಾರವನ್ನು ತಿಳಿಸಲು ದೇವರು ನನ್ನನ್ನು ಕಳುಹಿಸಿದ್ದಾನೆ.
20ಈಗ ಕೇಳು! ಈ ಸಂಗತಿಗಳು ನೆರವೇರುವತನಕ ನೀನು
ಮೂಕನಾಗಿರುವೆ. ಏಕೆಂದರೆ ನೀನು ನನ್ನ ಮಾತನ್ನು ನಂಬಲಿಲ್ಲ.
ಆದರೆ ನಾನು ಹೇಳಿದ ಈ ಸಂಗತಿಗಳು ಖಂಡಿತವಾಗಿ ನೆರವೇರು
ತ್ತವೆ’’ ಎಂದು ಹೇಳಿದನು.

21ಜನರು ಜಕರೀಯನಿಗಾಗಿ ಎದುರುನೋಡುತ್ತಾ ದೇವಾ
ಲಯದೊಳಗೆ ಅವನು ಇಷ್ಟುಹೊತ್ತು ಇರಲು ಕಾರಣವೇನಿರ

---

**ಹೆರೋದ** ಜುದೇಯವನ್ನು ಆಳಿದ ಒಂದನೇ ಹೆರೋದನು ಕ್ರಿ.ಪೂ. 40-4.

**ಅಬೀಯನ ವರ್ಗ** ಯಹೂದ್ಯಯಾಜಕರು 24ವರ್ಗಗಳಾಗಿ ವಿಂಗಡಿಸಲ್ಪಟ್ಟಿದ್ದರು. 1 ಪೂ.ಕಾ. ವೃ 24ನೇ ಅಧ್ಯಾಯವನ್ನು ನೋಡಿರಿ.

**ಪವಿತ್ರಾತ್ಮ** ದೇವರ ಆತ್ಮನೆಂತಲೂ ಕ್ರಿಸ್ತನ ಆತ್ಮನೆಂತಲೂ ಸಂತೈಸುವವನೆಂತಲೂ ಕರೆಯಲ್ಪಟ್ಟಿದ್ದಾನೆ. ಆತನು ದೇವರೊಂದಿಗೆ ಮತ್ತು ಕ್ರಿಸ್ತನೊಂದಿಗೆ ಸೇರಿ, ಲೋಕದ ಜನರ ಮಧ್ಯದಲ್ಲಿ ದೇವರ ಕಾರ್ಯವನ್ನು ಮಾಡುತ್ತಾನೆ.

**ಎಲೀಯ** ಸುಮಾರು ಕ್ರಿ. ಪೂ. 850ರಲ್ಲಿ ಜೀವಿಸಿದ್ದ ಪ್ರವಾದಿ.

ಬಹುದೆಂದು ಆಶ್ಚರ್ಯಚಕಿತರಾದರು. 22ಬಳಿಕ ಜಕರೀಯನು
ಹೊರಗೆ ಬಂದಾಗ, ಅವನಿಗೆ ಅವರೊಡನೆ ಮಾತಾಡಲಾಗಲಿಲ್ಲ.
ಆದುದರಿಂದ ಅವನಿಗೆ ದೇವಾಲಯದಲ್ಲಿ ದರ್ಶನವಾಗಿರ
ಬೇಕೆಂದು ಅವರು ತಿಳಿದುಕೊಂಡರು. ಅಂದಿನಿಂದ ಅವನು
ಮಾತಾಡಲಾಗದೆ ಕೇವಲ ಸನ್ನೆಗಳ ಮೂಲಕ ತಿಳಿಸುತ್ತಿದ್ದನು.
23ತನ್ನ ಯಾಜಕಸೇವೆಯ ಸರದಿಯು ಮುಗಿದ ಮೇಲೆ
ಜಕರೀಯನು ಮನೆಗೆ ಹಿಂತಿರುಗಿ ಹೋದನು.

24ಆ ಬಳಿಕ, ಜಕರೀಯನ ಹೆಂಡತಿಯಾದ ಎಲಿಜಬೇತಳು
ಗರ್ಭಿಣಿಯಾದಳು. ಆದ್ದರಿಂದ ಆಕೆ ಐದು ತಿಂಗಳವರೆಗೆ ತನ್ನ
ಮನೆಯಿಂದ ಹೊರಗೆ ಹೋಗಲಿಲ್ಲ. 25ಎಲಿಜಬೇತಳು,
''ನೋಡಿ, ಪ್ರಭುವು (ದೇವರು) ನನಗೋಸ್ಕರ ಎಂಥಾ
ಕಾರ್ಯ ಮಾಡಿದ್ದಾನೆ! ನನ್ನ ಜನರ ನಡುವೆ ನನಗಿದ್ದ ಅವಮಾನ
ವನ್ನು ಪ್ರಭುವು ತೊಲಗಿಸಿದ್ದಾನೆ'' ಎಂದು ಹೇಳಿದಳು.

## ಕನ್ಯೆ ಮರಿಯಳು

26-27ಎಲಿಜಬೇತಳು ಆರು ತಿಂಗಳ ಗರ್ಭಿಣಿಯಾಗಿದ್ದಾಗ,
ದೇವರು ತನ್ನ ದೂತನಾದ ಗಬ್ರಿಯೇಲನನ್ನು ಗಲಿಲೇಯ
ಪ್ರಾಂತ್ಯದ ನಜರೇತ್ ಎಂಬ ಊರಿನಲ್ಲಿ ವಾಸಿಸುತ್ತಿದ್ದ ಒಬ್ಬ
ಕನ್ಯೆಯ ಬಳಿಗೆ ಕಳುಹಿಸಿದನು. ಆಕೆಗೆ ದಾವೀದನ ಮನೆತನದ
ಯೋಸೇಫನೊಂದಿಗೆ ನಿಶ್ಚಿತಾರ್ಥವಾಗಿತ್ತು. ಆಕೆಯ ಹೆಸರು
ಮರಿಯಳು. 28ದೇವದೂತನು ಆಕೆಯ ಬಳಿಗೆ ಬಂದು,
''ದೇವರಾಶೀರ್ವಾದ ಹೊಂದಿದವಳೇ, ನಿನಗೆ ಶುಭವಾಗಲಿ!
ಪ್ರಭುವು ನಿನ್ನೊಡನೆ ಇದ್ದಾನೆ'' ಎಂದು ಹೇಳಿದನು.

29ದೇವದೂತನ ಮಾತನ್ನು ಕೇಳಿ ಬಹು ಗಲಿಬಲಿಗೊಂಡ
ಮರಿಯಳು, ''ಇದರ ಅರ್ಥವೇನಿರಬಹುದು?'' ಎಂದು
ಆಶ್ಚರ್ಯಪಟ್ಟಳು.

30ದೇವದೂತನು ಆಕೆಗೆ, ''ಮರಿಯಳೇ, ಭಯಪಡಬೇಡ.
ದೇವರು ನಿನ್ನನ್ನು ಬಹಳವಾಗಿ ಆಶೀರ್ವದಿಸಿದ್ದಾನೆ. 31ಕೇಳು!
ನೀನು ಗರ್ಭಿಣಿಯಾಗಿ ಒಂದು ಗಂಡುಮಗುವನ್ನು ಹೆರುವೆ.
ಆತನಿಗೆ, ''ಯೇಸು'' ಎಂದು ಹೆಸರಿಡಬೇಕು. 32ಆತನು ಮಹಾ
ಪುರುಷನಾಗುವನು. ಜನರು ಆತನನ್ನು ಮಹೋನ್ನತನ
(ದೇವರ) ಮಗನೆಂದು ಕರೆಯುವರು. ಪ್ರಭುವಾದ ದೇವರು
ಆತನಿಗೆ ಆತನ ಪೂರ್ವಿಕನಾದ ದಾವೀದನ ಅಧಿಕಾರವನ್ನು
ಕೊಡುವನು. 33ಯೇಸುವು ಯಾಕೋಬನ ಜನರನ್ನು ಸದಾ
ಕಾಲ ಆಳುವನು. ಆತನ ರಾಜ್ಯ ಎಂದಿಗೂ ಅಂತ್ಯವಾಗುವುದಿಲ್ಲ''
ಎಂದು ಹೇಳಿದನು.

34ಮರಿಯಳು ದೇವದೂತನಿಗೆ, ''ಇದು ಹೇಗೆ ಸಂಭವಿಸು
ವುದು? ನಾನು ಮದುವೆಯಾಗಿಲ್ಲವಲ್ಲಾ!'' ಎಂದು ಹೇಳಿದಳು.

35ದೇವದೂತನು ಮರಿಯಳಿಗೆ, ''ಪವಿತ್ರಾತ್ಮನು ನಿನ್ನ
ಮೇಲೆ ಬರುವನು; ಮಹೋನ್ನತನ (ದೇವರ) ಶಕ್ತಿಯು
ನಿನ್ನನ್ನು ಆವರಿಸುವುದು. ಈ ಕಾರಣದಿಂದ ನಿನ್ನಲ್ಲಿ ಹುಟ್ಟುವ
ಈ ಪವಿತ್ರ ಮಗುವು 'ದೇವರ ಮಗ'ನೆನಿಸಿಕೊಳ್ಳುವನು.
36ಇದಲ್ಲದೆ, ನಿನ್ನ ಬಂಧುವಾದ ಎಲಿಜಬೇತಳು ಗರ್ಭಿಣಿ
ಯಾಗಿದ್ದಾಳೆ. ಆಕೆಯು ಬಹಳ ಮುಪ್ಪಿನವಳಾಗಿದ್ದರೂ ಆಕೆ
ಗೊಬ್ಬ ಮಗ ಹುಟ್ಟುವನು. ಜನರಿಂದ ಬಂಜೆ ಎನಿಸಿಕೊಂಡಿದ್ದ
ಆಕೆ ಈಗ ಆರು ತಿಂಗಳ ಗರ್ಭಿಣಿಯಾಗಿದ್ದಾಳೆ. 37ದೇವರಿಗೆ
ಯಾವುದೂ ಅಸಾಧ್ಯವಲ್ಲ'' ಎಂದು ಹೇಳಿದನು.

38ಮರಿಯಳು, ''ನಾನು ಪ್ರಭುವಿನ (ದೇವರ) ದಾಸಿ.
ನೀನು ಹೇಳಿದಂತೆಯೇ ನನಗಾಗಲಿ!'' ಅಂದಳು. ಬಳಿಕ ದೇವ
ದೂತನು ಹೊರಟು ಹೋದನು.

## ಮರಿಯಳು ನೀಡಿದ ಸಂದರ್ಶನ

39ಆಗ ಮರಿಯಳು ಎದ್ದು ಜುದೇಯದ ಗುಡ್ಡ
ಪ್ರದೇಶದಲ್ಲಿರುವ ಒಂದು ಊರಿಗೆ ಬೇಗಬೇಗನೆ ಹೋದಳು.
40ಅಲ್ಲಿ ಜಕರೀಯನ ಮನೆಯೊಳಗೆ ಹೋಗಿ ಎಲಿಜಬೇತಳನ್ನು
ವಂದಿಸಿದಳು. 41ಎಲಿಜಬೇತಳು ಮರಿಯಳ ವಂದನೆಯನ್ನು
ಕೇಳಿದಾಗ, ಆಕೆಯ ಗರ್ಭದಲ್ಲಿದ್ದ ಮಗು ನಲಿದಾಡಿತು. ಆಗ
ಎಲಿಜಬೇತಳು ಪವಿತ್ರಾತ್ಮಭರಿತಳಾಗಿ 42ಹರ್ಷೋದ್ಗಾರದಿಂದ
ಹೀಗೆಂದಳು: ''ದೇವರು ನಿನ್ನನ್ನು (ಮರಿಯ) ಬೇರೆಲ್ಲಾ
ಸ್ತ್ರೀಯರಿಗಿಂತ ಹೆಚ್ಚಾಗಿ ಆಶೀರ್ವದಿಸಿದ್ದಾನೆ. ನಿನ್ನಲ್ಲಿ ಜನಿಸ
ಲಿರುವ ಮಗುವನ್ನು ದೇವರು ಆಶೀರ್ವದಿಸಿದ್ದಾನೆ. 43ನನ್ನ
ಪ್ರಭುವಿನ ತಾಯಿಯಾದ ನೀನೇ ನನ್ನ ಬಳಿಗೆ ಬಂದದ್ದು
ನನಗೆಷ್ಟೋ ಭಾಗ್ಯ! 44ನಿನ್ನ ಧ್ವನಿಯನ್ನು ಕೇಳಿದಾಗ, ನನ್ನೊಳ
ಗಿರುವ ಕೂಸು ಸಂತೋಷದಿಂದ ನಲಿದಾಡಿತು. 45ಪ್ರಭುವು
(ದೇವರು) ನಿನಗೆ ಹೇಳಿದ್ದು ಸಂಭವಿಸೇ ತೀರುವುದೆಂದು ನೀನು
ನಂಬಿ ಧನ್ಯಳಾದೆ'' ಎಂದಳು.

## ಮರಿಯಳು ದೇವರನ್ನು ಸ್ತುತಿಸಿದಳು

46ಆಗ ಮರಿಯಳು,

47''ನನ್ನ ಪ್ರಾಣವು ಪ್ರಭುವನ್ನು (ದೇವರನ್ನು)
ಸ್ತುತಿಸುತ್ತದೆ. ದೇವರೇ ನನ್ನ ರಕ್ಷಕನಾಗಿರುವುದ
ರಿಂದ ನನ್ನ ಹೃದಯವು ಸಂತೋಷಗೊಂಡಿದೆ.
48 ದೇವರು ತನ್ನ ದಾಸಿಯಾದ ನನ್ನನ್ನು ಕಟಾಕ್ಷಿಸಿ
ದ್ದಾನೆ. ಇಂದಿನಿಂದ, ಎಲ್ಲಾ ಜನರು ನನ್ನನ್ನು
ಧನ್ಯಳೆಂದು ಹೇಳುವರು.
49 ಏಕೆಂದರೆ ಸರ್ವಶಕ್ತನು (ದೇವರು) ನನಗೆ
ಮಹಾಕಾರ್ಯಗಳನ್ನು ಮಾಡಿದ್ದಾನೆ. ಆತನ
ಹೆಸರು ಅತಿ ಪರಿಶುದ್ಧವಾದದ್ದು.
50 ದೇವರು ತನ್ನಲ್ಲಿ ಭಯಭಕ್ತಿಯುಳ್ಳ ಜನರಿಗೆ
ಎಂದೆಂದಿಗೂ ಕರುಣೆ ತೋರುವನು.
51 ಆತನು ತನ್ನ ಭುಜಬಲವನ್ನು ತೋರಿ ಗರ್ವಿಷ್ಠ
ರನ್ನು ಚದರಿಸುತ್ತಾನೆ.
52 ದೇವರು ಅಧಿಪತಿಗಳನ್ನು ಅವರ ಸಿಂಹಾಸನ
ಗಳಿಂದ ಕೆಳಗಿಳಿಸಿ ದೀನರನ್ನು ಉನ್ನತಿ
ಗೇರಿಸುತ್ತಾನೆ.
53 ಆತನು ಹಸಿದವರನ್ನು ಮೃಷ್ಟಾನ್ನದಿಂದ ತೃಪ್ತಿ
ಗೊಳಿಸಿ ಐಶ್ವರ್ಯವಂತರನ್ನು ಬರಿಗೈಯಲ್ಲಿ
ಕಳುಹಿಸಿ ಬಿಡುತ್ತಾನೆ.
54 ದೇವರು ನಮ್ಮ ಪೂರ್ವಿಕರಿಗೆ ಮಾಡಿದ
ವಾಗ್ದಾನಕ್ಕನುಸಾರವಾಗಿ ಅಬ್ರಹಾಮನಿಗೂ
ಅವನ ಸಂತತಿಯವರಿಗೂ ಯಾವಾಗಲೂ
55 ಕರುಣೆ ತೋರಬೇಕೆಂದುಕೊಂಡು ತನ್ನ ಸೇವಕ
ನಾದ ಇಸ್ರೇಲನನ್ನು ಕೈ ಹಿಡಿದಿದ್ದಾನೆ'' ಎಂದಳು.

56ಮರಿಯಳು ಸುಮಾರು ಮೂರು ತಿಂಗಳ ಕಾಲ
ಎಲಿಜಬೇತಳೊಡನೆ ತಂಗಿದ್ದು ತನ್ನ ಮನೆಗೆ ಹಿಂತಿರುಗಿದಳು.

### ಯೋಹಾನನ ಜನನ

57ಎಲಿಜಬೇತಳಿಗೆ ಹೆರಿಗೆ ಕಾಲ ಬಂದಿತು. ಆಕೆಯಲ್ಲಿ ಒಬ್ಬ
ಮಗನು ಹುಟ್ಟಿದನು. 58ಪ್ರಭುವು ಆಕೆಗೆ ತೋರಿದ ಮಹಾ
ಕರುಣೆಯು ಆಕೆಯ ನೆರೆಹೊರೆಯವರಿಗೆ ಮತ್ತು ಬಂಧುಗಳಿಗೆ
ತಿಳಿಯಿತು. ಅವರು ಆಕೆಯ ವಿಷಯದಲ್ಲಿ ಸಂತೋಷಪಟ್ಟರು.
59ಮಗುವಿಗೆ ಎಂಟು ದಿನವಾದಾಗ ಸುನ್ನತಿಗಾಗಿ ಅವರು
ಬಂದರು. ಅವರು ಆ ಮಗುವಿಗೆ ''ಜಕರೀಯ'' ಎಂಬ ಹೆಸರು
ಇಡಬೇಕೆಂದಿದ್ದರು. ಏಕೆಂದರೆ ಅದು ಮಗುವಿನ ತಂದೆಯ
ಹೆಸರಾಗಿತ್ತು. 60ಆದರೆ ಮಗುವಿನ ತಾಯಿ, ''ಇಲ್ಲ! ಆತನಿಗೆ
'ಯೋಹಾನ' ಎಂಬ ಹೆಸರಿಡಬೇಕು'' ಎಂದು ಹೇಳಿದಳು.

61ಜನರು ಎಲಿಜಬೇತಳಿಗೆ, ''ನಿನ್ನ ಕುಟುಂಬದಲ್ಲಿ
ಯಾರಿಗೂ ಈ ಹೆಸರು ಇಲ್ಲವಲ್ಲಾ!'' ಎಂದು ಹೇಳಿದರು.
62ಬಳಿಕ ಅವರು ಅವನ ತಂದೆಗೆ ಸನ್ನೆಮಾಡಿ, ''ಆತನಿಗೆ ಯಾವ
ಹೆಸರಿಡಬೇಕು'' ಎಂದು ಕೇಳಿದರು.

63ಆಗ ಜಕರೀಯನು ಸನ್ನೆಮಾಡಿ, ಒಂದು ಹಲಗೆಯನ್ನು
ತರಿಸಿಕೊಂಡು, ''ಈತನ ಹೆಸರು ಯೋಹಾನ'' ಎಂದು ಬರೆ
ದನು. ಜನರೆಲ್ಲರಿಗೂ ಆಶ್ಚರ್ಯವಾಯಿತು. 64ಆ ಕೂಡಲೇ
ಜಕರೀಯನು ಮತ್ತೆ ಮಾತಾಡಬಲ್ಲವನಾಗಿ ದೇವರನ್ನು ಸ್ತುತಿ
ಸತೊಡಗಿದನು. 65ಇದನ್ನು ಕೇಳಿ ನೆರೆಹೊರೆಯವರಿಗೆಲ್ಲಾ
ಭಯವಾಯಿತು. ಜುದೇಯದ ಗುಡ್ಡ ಪ್ರದೇಶದಲ್ಲೆಲ್ಲಾ ಈ
ಸಂಗತಿಗಳ ಬಗ್ಗೆ ಜನರು ಮಾತನಾಡತೊಡಗಿದರು. 66ಈ ಸಂಗತಿ
ಗಳನ್ನು ಕೇಳಿದ ಜನರೆಲ್ಲರು ಆಶ್ಚರ್ಯಪಟ್ಟು, ''ಈ ಮಗು
(ಯೋಹಾನ) ಬೆಳೆದು ದೊಡ್ಡವನಾದ ಮೇಲೆ ಎಂಥ ವ್ಯಕ್ತಿ
ಯಾಗುವನೊ?'' ಎಂದು ಯೋಚಿಸತೊಡಗಿದರು. ಏಕೆಂದರೆ
ಪ್ರಭುವು (ದೇವರು) ಈ ಮಗುವಿನ ಸಂಗಡವಿದ್ದನು.

### ಜಕರೀಯನ ಪ್ರವಾದನೆ

67ಬಳಿಕ ಯೋಹಾನನ ತಂದೆಯಾದ ಜಕರೀಯನು
ಪವಿತ್ರಾತ್ಮಭರಿತನಾಗಿ ಹೀಗೆಂದು ಪ್ರವಾದಿಸಿದನು:

68''ಇಸ್ರೇಲರ (ಯೆಹೂದ್ಯರ) ಪ್ರಭುವಾದ ದೇವ
ರಿಗೆ ಸ್ತೋತ್ರವಾಗಲಿ. ಆತನು ಬಂದು ತನ್ನ
ಜನರನ್ನು ಬಿಡುಗಡೆ ಮಾಡಿದ್ದಾನೆ.
69 ತನ್ನ ಸೇವಕನಾದ ದಾವೀದನ ಮನೆತನದಿಂದ
ದೇವರು ವೀರ ರಕ್ಷಕನನ್ನು ನಮಗೆ ಕೊಟ್ಟಿದ್ದಾನೆ.
70 ಇದನ್ನು ಆತನು ಪೂರ್ವಕಾಲದ ತನ್ನ ಪವಿತ್ರ
ಪ್ರವಾದಿಗಳ ಮೂಲಕ ತಿಳಿಸಿದ್ದಾನೆ.
71 ದೇವರು ನಮ್ಮನ್ನು ನಮ್ಮ ವೈರಿಗಳಿಂದಲೂ
ದ್ವೇಷಿಗಳ ಹಿಡಿತದಿಂದಲೂ ರಕ್ಷಿಸಿದ್ದಾನೆ.
72 ಕರುಣೆ ತೋರುವುದಾಗಿ ನಮ್ಮ ಪಿತೃಗಳಿಗೆ
ನೀಡಿದ ತನ್ನ ಪವಿತ್ರ ವಾಗ್ದಾನವನ್ನು ಆತನು
ಜ್ಞಾಪಿಸಿಕೊಂಡಿದ್ದಾನೆ.
73 ನಮ್ಮ ವೈರಿಗಳ ಹಿಡಿತದಿಂದ ನಮ್ಮನ್ನು
ಬಿಡಿಸುವುದಾಗಿ ದೇವರು ನಮ್ಮ ಪಿತೃವಾದ
ಅಬ್ರಹಾಮನಿಗೆ ವಾಗ್ದಾನ ಮಾಡಿದ್ದಾನೆ.
74-75ಏಕೆಂದರೆ ನಮ್ಮ ಜೀವಮಾನವೆಲ್ಲಾ ನಾವು
ಆತನ ಸನ್ನಿಧಿಯಲ್ಲಿ ನೀತಿವಂತರೂ ಪರಿ
ಶುದ್ಧರೂ ಆಗಿದ್ದು ಭಯವಿಲ್ಲದೆ ಆತನ ಸೇವೆ
ಮಾಡಬೇಕೆಂಬುದೇ ಆತನ ಉದ್ದೇಶವಾಗಿತ್ತು.
76 ಮಗುವೇ, ''ನೀನು ಮಹೋನ್ನತನ ಪ್ರವಾದಿ
ಎನಿಸಿಕೊಳ್ಳುವೆ. ಪ್ರಭುವಿನ ಮುಂದೆ ಹೋಗಿ
ಆತನ ಬರುವಿಕೆಗಾಗಿ ಜನರನ್ನು ಸಿದ್ಧಮಾಡುವೆ.
77 ಪಾಪಕ್ಷಮೆಯ ಮೂಲಕವಾಗಿ ರಕ್ಷಣೆಯಾಗುವು
ದೆಂಬ ತಿಳುವಳಿಕೆಯನ್ನು ನೀನು ಜನರಿಗೆ
ಕೊಡುವೆ.
78 ನಮ್ಮ ದೇವರ ಮಹಾಕರುಣೆಯಿಂದ ಪರ
ಲೋಕದಿಂದ ಹೊಸ ದಿನವೊಂದು ನಮಗಾಗಿ
ಉದಯಿಸುವುದು.
79 ಅಂಧಕಾರದಲ್ಲಿ ಜೀವಿಸುತ್ತಾ ಮರಣಭಯದಲ್ಲಿ
ರುವ ಜನರಿಗೆ ದೇವರು ಸಹಾಯ ಮಾಡುವನು.
ಆತನು ನಮ್ಮನ್ನು ಸಮಾಧಾನದ ಮಾರ್ಗದಲ್ಲಿ
ನಡೆಸುವನು.''

80ಆ ಮಗುವು (ಯೋಹಾನನು) ಬೆಳೆದು ದೊಡ್ಡವನಾಗಿ
ಆತ್ಮದಲ್ಲಿ ಬಲವುಳ್ಳವನಾದನು. ಇಸ್ರೇಲರಿಗೆ (ಯೆಹೂದ್ಯರಿಗೆ)
ತನ್ನ ಉಪದೇಶವನ್ನು ಆರಂಭಿಸುವ ತನಕ ಯೋಹಾನನು
ಅಡವಿಯಲ್ಲಿ ವಾಸವಾಗಿದ್ದನು.

### ಯೇಸುವಿನ ಜನನ

(ಮತ್ತಾಯ 1:18-25)

2 ಆ ಕಾಲದಲ್ಲಿ ಚಕ್ರವರ್ತಿ ಅಗಸ್ಟಸ್ ಸೀಸರನು ರೋಮನ್ನರ
ಆಳ್ವಿಕೆಗೆ ಒಳಪಟ್ಟಿದ್ದ ಎಲ್ಲಾ ದೇಶಗಳಲ್ಲಿ ಜನಗಣತಿ
ಆಗಬೇಕೆಂದು ಆಜ್ಞಾಪಿಸಿದನು. 2ಇದು ಮೊಟ್ಟಮೊದಲನೆಯ
ಜನಗಣತಿಯಾಗಿತ್ತು. ಕುರೇನ್ಯನು ಸಿರಿಯ ದೇಶದ ರಾಜ್ಯ
ಪಾಲನಾಗಿದ್ದಾಗ ಇದು ಸಂಭವಿಸಿತು. 3ಜನರೆಲ್ಲರೂ ತಮ್ಮ
ಹೆಸರನ್ನು ನೊಂದಾಯಿಸಿಕೊಳ್ಳಲು ತಮ್ಮತಮ್ಮ ಊರುಗಳಿಗೆ
ಪ್ರಯಾಣ ಮಾಡಿದರು.

4ಆದ್ದರಿಂದ ಯೋಸೇಫನು ಗಲಿಲೇಯದಲ್ಲಿನ ನಜರೇತ್
ಎಂಬ ಊರಿನಿಂದ ಹೊರಟು ಜುದೇಯದಲ್ಲಿನ ಬೆತ್ಲೆಹೇಮ್
ಎಂಬ ಊರಿಗೆ ಹೋದನು. ಯೋಸೇಫನು ದಾವೀದನ ಮನೆ
ತನದವನಾಗಿದ್ದುದರಿಂದ ದಾವೀದನ ಊರಾದ ಬೆತ್ಲೆಹೇಮಿಗೆ
ಹೋದನು. 5ಅವನು ತನ್ನೊಂದಿಗೆ ಮರಿಯಳನ್ನೂ ಕರೆದು
ಕೊಂಡು ಹೋದನು. ಆಕೆಗೆ ಅವನೊಂದಿಗೆ ನಿಶ್ಚಿತಾರ್ಥ
ವಾಗಿತ್ತು. (ಮರಿಯಳು ಆಗ ಗರ್ಭಿಣಿಯಾಗಿದ್ದಳು.) 6ಅವರು
ಬೆತ್ಲೆಹೇಮಿನಲ್ಲಿದ್ದಾಗ ಮರಿಯಳಿಗೆ ಹೆರಿಗೆ ಕಾಲ ಬಂತು. 7ಆಕೆ
ತನ್ನ ಚೊಚ್ಚಲ ಮಗುವನ್ನು (ಯೇಸು) ಹೆತ್ತಳು. ಅವರಿಗೆ ಇಳಿದು
ಕೊಳ್ಳಲು ಛತ್ರದಲ್ಲಿ ಸ್ಥಳ ದೊರೆಯಲಿಲ್ಲ. ಆದುದರಿಂದ
ಮರಿಯಳು ಮಗುವನ್ನು ಬಟ್ಟೆಯಿಂದ ಸುತ್ತಿ ದನದ ಕೊಟ್ಟಿಗೆ
ಯಲ್ಲಿ ಮೇವು ಹಾಕುತ್ತಿದ್ದ ತೊಟ್ಟಿಯಲ್ಲಿ ಮಲಗಿಸಿದಳು.

### ಕುರುಬರಿಗೆ ದೊರೆತ ಸಂದೇಶ

8ಆ ರಾತ್ರಿ, ಕೆಲವು ಕುರುಬರು ಹೊಲಗಳ ಸಮೀಪದಲ್ಲಿ
ತಮ್ಮ ಕುರಿಗಳನ್ನು ಕಾಯುತ್ತಿದ್ದರು. 9ಪ್ರಭುವಿನ ದೂತ

ನೊಬ್ಬನು ಕುರುಬರ ಮುಂದೆ ನಿಂತನು. ಅವರ ಸುತ್ತಲೂ ಪ್ರಭುವಿನ ಪ್ರಭೆಯು ಪ್ರಕಾಶಿಸಿತು. ಕುರುಬರು ಬಹಳವಾಗಿ ಹೆದರಿದರು.

[10]ದೇವದೂತನು ಅವರಿಗೆ, ''ಹೆದರಬೇಡಿರಿ, ಜನರೆಲ್ಲರಿಗೆ ಮಹಾಸಂತೋಷವನ್ನು ಉಂಟುಮಾಡುವ ಶುಭ ಸಂದೇಶವನ್ನು ನಿಮಗೆ ತಿಳಿಸುತ್ತೇನೆ. ಅದೇನಂದರೆ: [11]ಈ ದಿನ ನಿಮಗೋಸ್ಕರ ದಾವೀದನ ಊರಿನಲ್ಲಿ ರಕ್ಷಕನು ಜನಿಸಿದ್ದಾನೆ. ಆತನೇ ಪ್ರಭುವಾದ ಕ್ರಿಸ್ತನು. [12]ಬಟ್ಟೆಯಲ್ಲಿ ಸುತ್ತಿರುವ ಒಂದು ಮಗು ದನದ ಕೊಟ್ಟಿಗೆಯಲ್ಲಿ ಮಲಗಿರುವುದನ್ನು ನೀವು ಕಾಣುವಿರಿ. ನೀವು ಆತನನ್ನು ಗೊತ್ತುಪಡಿಸಿಕೊಳ್ಳಲು ಅದೇ ಗುರುತಾಗಿದೆ'' ಎಂದು ಹೇಳಿದನು.

[13]ತಕ್ಷಣವೇ ಪರಲೋಕದಿಂದ ದೇವದೂತರು ಬಹು ದೊಡ್ಡ ಗುಂಪಾಗಿ ಬಂದು ಮೊದಲನೆಯ ದೇವದೂತನೊಡನೆ ಸೇರಿಕೊಂಡರು. ಅವರೆಲ್ಲರೂ,

[14]''ಮೇಲಣ ಲೋಕಗಳಲ್ಲಿ ದೇವರಿಗೆ ಮಹಿಮೆ;
ಭೂಲೋಕದಲ್ಲಿ ದೇವರೊಲಿದವರಿಗೆ
ಸಮಾಧಾನ'' ಎಂದು ಹೇಳುತ್ತಾ ದೇವರನ್ನು
ಸ್ತುತಿಸಿದರು.

[15]ದೇವದೂತರು ಕುರುಬರ ಬಳಿಯಿಂದ ಪರಲೋಕಕ್ಕೆ ಹಿಂತಿರುಗಿದ ಮೇಲೆ ಕುರುಬರು, ''ನಾವು ಈಗಲೇ ಬೆತ್ಲೆಹೇಮಿಗೆ ಹೋಗಿ, ಪ್ರಭುವು ನಮಗೆ ತಿಳಿಸಿದ ಈ ಘಟನೆಯನ್ನು ನೋಡೋಣ'' ಎಂದು ಮಾತಾಡಿಕೊಂಡರು.

[16]ಆದುದರಿಂದ ಕುರುಬರು ಬೇಗನೆ ಹೋಗಿ ಮರಿಯಳನ್ನೂ ಯೋಸೇಫನನ್ನೂ ದನದ ಕೊಟ್ಟಿಗೆಯಲ್ಲಿ ಮಲಗಿದ್ದ ಮಗುವನ್ನೂ ಕಂಡುಕೊಂಡರು. [17]ಕುರುಬರು ಮಗುವನ್ನು ನೋಡಿದಾಗ ಅದರ ವಿಷಯವಾಗಿ ತಮಗೆ ದೇವದೂತರು ತಿಳಿಸಿದ್ದನ್ನು ಅವರಿಗೆ ತಿಳಿಯಪಡಿಸಿದರು. [18]ಕುರುಬರು ತಿಳಿಸಿದ್ದನ್ನು ಕೇಳಿದ ಅವರೆಲ್ಲರೂ ಆಶ್ಚರ್ಯಪಟ್ಟರು. [19]ಮರಿಯಳು ಈ ವಿಷಯಗಳನ್ನು ತನ್ನ ಹೃದಯದಲ್ಲಿಟ್ಟುಕೊಂಡು, ಅವುಗಳ ಬಗ್ಗೆ ಯೋಚಿಸತೊಡಗಿದಳು. [20]ಕುರುಬರು ತಾವು ಕಂಡು ಕೇಳಿದ ಪ್ರತಿಯೊಂದು ಸಂಗತಿಗಾಗಿ ದೇವರನ್ನು ಕೊಂಡಾಡುತ್ತಾ ಆತನನ್ನು ಸ್ತುತಿಸುತ್ತಾ ತಮ್ಮ ಕುರಿಗಳಿದ್ದಲ್ಲಿಗೆ ಮರಳಿ ಹೋದರು. ದೇವದೂತರು ಅವರಿಗೆ ತಿಳಿಸಿದಂತೆಯೇ ಪ್ರತಿಯೊಂದು ಸಂಗತಿಯೂ ನಡೆದಿತ್ತು.

[21]ಮಗುವಿಗೆ ಎಂಟು ದಿನವಾದಾಗ ಸುನ್ನತಿ* ಆಯಿತು ಮತ್ತು ಆತನಿಗೆ 'ಯೇಸು' ಎಂದು ಹೆಸರಿಡಲಾಯಿತು. ಮರಿಯಳ ಗರ್ಭದಲ್ಲಿ ಮಗುವು ಬೆಳೆಯುವುದಕ್ಕೆ ಪ್ರಾರಂಭಿಸುವ ಮೊದಲೇ ದೇವದೂತನು ಈ ಹೆಸರನ್ನೇ ಕೊಡಬೇಕೆಂದು ಸೂಚಿಸಿದ್ದನು.

**ಸುನ್ನತಿ** ಜನನಾಂಗದ ಮುಂದೊಗಲನ್ನು ಕತ್ತರಿಸುವುದು. ಪ್ರತಿ ಯೆಹೂದ್ಯ ಗಂಡುಮಗುವಿಗೆ ಹೀಗೆ ಮಾಡುತ್ತಿದ್ದರು. ದೇವರು ಅಬ್ರಹಾಮನೊಂದಿಗೆ ಮಾಡಿದ ಒಡಂಬಡಿಕೆಗೆ ಅದು ಸೂಚನೆಯಾಗಿತ್ತು. (ಆದಿ. 17:9-14).

## ದೇವಾಲಯದಲ್ಲಿ ಯೇಸುವಿನ ಪ್ರತಿಷ್ಠೆ

[22]ಶುದ್ಧೀಕರಣದ* ಬಗ್ಗೆ ಮೋಶೆಯ ಧರ್ಮಶಾಸ್ತ್ರವು ಬೋಧಿಸಿದ್ದ ಕಾರ್ಯಗಳನ್ನು ಮರಿಯಳು ಮತ್ತು ಯೋಸೇಫನು ಮಾಡುವ ಸಮಯ ಬಂತು. ಯೇಸುವನ್ನು ಪ್ರಭುವಿಗೆ (ದೇವರಿಗೆ) ಪ್ರತಿಷ್ಠಿಸಲು ಯೋಸೇಫನು ಮತ್ತು ಮರಿಯಳು ಆತನನ್ನು ಜೆರುಸಲೇಮಿಗೆ ಕರೆದುಕೊಂಡು ಬಂದರು. [23]ಏಕೆಂದರೆ ''ಪ್ರತಿ ಕುಟುಂಬದಲ್ಲಿ, 'ಚೊಚ್ಚಲು ಗಂಡುಮಗುವನ್ನು ಪ್ರಭುವಿಗೆ ಪ್ರತಿಷ್ಠಿಸಬೇಕು''' * ಎಂದು ಪ್ರಭುವಿನ ಧರ್ಮಶಾಸ್ತ್ರದಲ್ಲಿ ಬರೆದಿದೆ. [24]''ಎರಡು ಪಾರಿವಾಳಗಳನ್ನು ಅಥವಾ ಎರಡು ಬೆಳವಕ್ಕಿಗಳನ್ನು ಯಜ್ಞವಾಗಿ ಸಮರ್ಪಿಸಬೇಕು'' * ಎಂದು ಸಹ ಪ್ರಭುವಿನ ಧರ್ಮಶಾಸ್ತ್ರವು ಹೇಳುತ್ತದೆ. ಆದುದರಿಂದ ಯೋಸೇಫನು ಮತ್ತು ಮರಿಯಳು ಜೆರುಸಲೇಮಿಗೆ ಹೋದರು.

## ಸಿಮೆಯೋನನು ಯೇಸುವನ್ನು ನೋಡಿದನು

[25]ಸಿಮೆಯೋನನೆಂಬ ಒಬ್ಬ ಮನುಷ್ಯನು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದನು. ಅವನು ಒಳ್ಳೆಯವನಾಗಿದ್ದನು ಮತ್ತು ಬಹಳ ಧಾರ್ಮಿಕನಾಗಿದ್ದನು. ದೇವರು ಇಸ್ರೇಲರಿಗೆ (ಯೆಹೂದ್ಯರಿಗೆ) ಸಹಾಯ ಮಾಡುವ ಕಾಲವನ್ನೇ ಸಿಮೆಯೋನನು ಎದುರು ನೋಡುತ್ತಿದ್ದನು. ಅವನು ಪವಿತ್ರಾತ್ಮಭರಿತನಾಗಿದ್ದನು. [26]ಪ್ರಭುವು ಕಳುಹಿಸುವ ಕ್ರಿಸ್ತನನ್ನು* ನೋಡುವ ತನಕ ನೀನು ಸಾಯುವುದಿಲ್ಲ ಎಂದು ಪವಿತ್ರಾತ್ಮನು ಸಿಮೆಯೋನನಿಗೆ ತಿಳಿಸಿದ್ದನು. [27]ಸಿಮೆಯೋನನು ಪವಿತ್ರಾತ್ಮನ ಪ್ರೇರಣೆಯಿಂದ ದೇವಾಲಯಕ್ಕೆ ಬಂದನು. ಯೆಹೂದ್ಯರ ಧರ್ಮಶಾಸ್ತ್ರದ ವಿಧಿಗಳನ್ನು ಪೂರೈಸಲು ಮರಿಯಳು ಮತ್ತು ಯೋಸೇಫನು ದೇವಾಲಯಕ್ಕೆ ಹೋದರು. ಅವರು ಮಗು ಯೇಸುವನ್ನು ದೇವಾಲಯಕ್ಕೆ ತಂದರು. [28]ಸಿಮೆಯೋನನು ಮಗುವನ್ನು ತನ್ನ ಕೈಗಳಲ್ಲಿ ಎತ್ತಿಕೊಂಡು ದೇವರಿಗೆ ಹೀಗೆಂದು ಸ್ತೋತ್ರ ಸಲ್ಲಿಸಿದನು:

[29]''ಪ್ರಭುವೇ, ನಿನ್ನ ವಾಗ್ದಾನದಂತೆ ಸಮಾಧಾನ
ದಿಂದ ಸಾಯಲು ನಿನ್ನ ದಾಸನಿಗೆ ಅಪ್ಪಣೆ
ಯಾಗಲಿ.
[30] ನೀನು ದಯಪಾಲಿಸಿದ ರಕ್ಷಕನನ್ನು* ಕಣ್ಣಾರೆ
ಕಂಡೆನು.
[31] ನೀನು ಆತನನ್ನು ಜನರೆಲ್ಲರಿಗೆ ಪ್ರತ್ಯಕ್ಷ
ಮಾಡಿರುವೆ.

**ಶುದ್ಧೀಕರಣ** ಯೆಹೂದ್ಯ ಸ್ತ್ರೀಯು ಮಗುವನ್ನು ಹೆತ್ತು ನಲವತ್ತು ದಿನಗಳಾದ ನಂತರ ದೇವಾಲಯದಲ್ಲಿ ನಡೆಸುವ ಒಂದು ಸಂಸ್ಕಾರದ ಮೂಲಕ ಶುದ್ಧಿಯಾಗಬೇಕು ಎಂದು ಮೋಶೆಯ ಧರ್ಮಶಾಸ್ತ್ರ ಹೇಳಿದೆ. ಯಾಜಕ 12:2-8 ಓದಿರಿ.

**ಪ್ರತಿ ... ಪ್ರತಿಷ್ಠಿಸಬೇಕು** ವಿಮೋಚನ. 13:2

**ಎರಡು ... ಸಮರ್ಪಿಸಬೇಕು** ಯಾಜಕ 12:8

**ಕ್ರಿಸ್ತನು** ದೇವರಿಂದ ಅಭಿಷೇಕಿಸಲ್ಪಟ್ಟವನು.

**ರಕ್ಷಕ** ಅಕ್ಷರಶಃ ರಕ್ಷಣೆ. ಯೇಸು ಅಂದರೆ ರಕ್ಷಣೆ.

32 ಆತನು ಯೆಹೂದ್ಯರಲ್ಲದ ಜನರಿಗೆ ನಿನ್ನ ಮಾರ್ಗ
ವನ್ನು ತೋರಿಸುವ ಬೆಳಕಾಗಿದ್ದಾನೆ. ಆತನಿಂದ
ನಿನ್ನ ಜನರಾದ ಇಸ್ರೇಲರಿಗೆ (ಯೆಹೂದ್ಯರಿಗೆ)
ಕೀರ್ತಿಯಾಗುವುದು.''

33ಸಿಮೆಯೋನನು ಮಗುವಿನ ಕುರಿತಾಗಿ ಹೇಳಿದ ಮಾತು
ಗಳನ್ನು ಕೇಳಿ ತಂದೆತಾಯಿಗಳಿಗೆ ಆಶ್ಚರ್ಯವಾಯಿತು. 34ಬಳಿಕ
ಸಿಮೆಯೋನನು ಅವರನ್ನು ಆಶೀರ್ವದಿಸಿ ಮರಿಯಳಿಗೆ, ''ಈ
ಮಗುವಿನ ನಿಮಿತ್ತ ಯೆಹೂದ್ಯರಲ್ಲಿ ಅನೇಕರು ಬೀಳುವರು,
ಅನೇಕರು ಏಳುವರು, ಕೆಲವರು ಅಂಗೀಕರಿಸರು ಎಂಬುದಕ್ಕೆ
ಈತನು ದೇವರಿಂದ ಬಂದ ಗುರುತಾಗಿರುವನು. 35ಜನರು
ಗುಟ್ಟಾಗಿ ಯೋಚಿಸುವ ಸಂಗತಿಗಳು ಬಯಲಾಗುವವು. ಮುಂದೆ
ಸಂಭವಿಸುವ ಸಂಗತಿಗಳಿಂದ ನಿನ್ನ ಹೃದಯಕ್ಕೆ ಅಲಗು ನಾಟಿ
ದಂತಾಗುವುದು'' ಎಂದು ಹೇಳಿದನು.

### ಅನ್ನಳು ಯೇಸುವನ್ನು ನೋಡಿದಳು

36ದೇವಾಲಯದಲ್ಲಿ ಅನ್ನಳೆಂಬ ಒಬ್ಬ ಪ್ರವಾದಿನಿ*
ಇದ್ದಳು. ಆಕೆಯು ಅಸೇರನ ವಂಶದ ಫನುವೇಲನ ಕುಟುಂಬ
ದವಳಾಗಿದ್ದಳು. ಅನ್ನಳು ಬಹಳ ಮುಪ್ಪಿನವಳಾಗಿದ್ದಳು. ಆಕೆಯು
ಮದುವೆಯಾದ ಏಳು ವರ್ಷಕ್ಕೆ ಗಂಡನನ್ನು ಕಳೆದುಕೊಂಡಳು.
37ತನ್ನ ಉಳಿದ ಜೀವಮಾನವೆಲ್ಲಾ ವಿಧವೆಯಾಗಿದ್ದ ಆಕೆಗೆ ಈಗ
ಎಂಭತ್ತನಾಲ್ಕು ವರ್ಷ ವಯಸ್ಸಾಗಿತ್ತು. ಅನ್ನಳು ಯಾವಾಗಲೂ
ದೇವಾಲಯದಲ್ಲಿಯೇ ಇದ್ದಳು. ಆಕೆ ಬೇರೆಲ್ಲಿಗೂ ಹೋಗು
ತ್ತಿರಲಿಲ್ಲ. ಆಕೆ ಉಪವಾಸ ಮಾಡುತ್ತಾ ಮತ್ತು ಹಗಲಿರುಳು
ಪ್ರಾರ್ಥಿಸುತ್ತಾ ದೇವರನ್ನು ಆರಾಧಿಸುತ್ತಿದ್ದಳು. 38ಅವಳು ಅದೇ
ಸಮಯದಲ್ಲಿ ಅಲ್ಲಿಗೆ ಬಂದು, ದೇವರಿಗೆ ಸ್ತೋತ್ರ ಸಲ್ಲಿಸಿ
ದೇವರು ಜೆರುಸಲೇಮಿಗೆ ದಯಪಾಲಿಸುವ ಬಿಡುಗಡೆಯನ್ನು
ಎದುರುನೋಡುತ್ತಿದ್ದ ಜನರಿಗೆ ಯೇಸುವಿನ ವಿಷಯವಾಗಿ
ತಿಳಿಸಿದಳು.

### ಯೋಸೇಫನು ಮತ್ತು ಮರಿಯಳು ಮನೆಗೆ ಮರಳಿದರು

39ಪ್ರಭುವಿನ ಧರ್ಮಶಾಸ್ತ್ರದ ಎಲ್ಲ ವಿಧಿಗಳನ್ನು ನೆರವೇರಿ
ಸಿದ ಮೇಲೆ ಯೋಸೇಫ ಮತ್ತು ಮರಿಯಳು ಗಲಿಲೇಯ
ಪ್ರಾಂತ್ಯದಲ್ಲಿದ್ದ ತಮ್ಮ ಸ್ವಂತ ಊರಾದ ನಜರೇತಿಗೆ ಹಿಂತಿರು
ಗಿದರು. 40ಬಾಲಕ ಯೇಸು ಬೆಳೆದು ಬಲಗೊಂಡು ಸಂಪೂರ್ಣ
ಜ್ಞಾನಿಯಾದನು. ದೇವರ ಆಶೀರ್ವಾದವು ಆತನೊಡನೆ ಇತ್ತು.

### ಬಾಲಕ ಯೇಸು

41ಪ್ರತಿವರ್ಷ ಯೇಸುವಿನ ತಂದೆತಾಯಿಗಳು ಪಸ್ಕಹಬ್ಬ
ಕ್ಕಾಗಿ* ಜೆರುಸಲೇಮಿಗೆ ಹೋಗುತ್ತಿದ್ದರು. 42ಯೇಸುವಿಗೆ
ಹನ್ನೆರಡು ವರ್ಷವಾಗಿದ್ದಾಗ ಎಂದಿನಂತೆ ಅವರು ಪಸ್ಕಹಬ್ಬಕ್ಕಾಗಿ
ಜೆರುಸಲೇಮಿಗೆ ಹೋದರು. 43ಹಬ್ಬದ ದಿನಗಳು ಮುಗಿದ
ನಂತರ ಅವರು ಮನೆಗೆ ಹೋದರು. ಆದರೆ ಬಾಲಕನಾದ
ಯೇಸು ಜೆರುಸಲೇಮಿನಲ್ಲಿ ಉಳಿದುಕೊಂಡನು. ಆತನ
ತಂದೆತಾಯಿಗಳಿಗೆ ಇದು ತಿಳಿದಿರಲಿಲ್ಲ. ಯೇಸುವು ಯಾತ್ರಿಕರ
ಗುಂಪಿನಲ್ಲಿರಬಹುದೆಂದು ಭಾವಿಸಿಕೊಂಡ 44ಯೋಸೇಫನು
ಮತ್ತು ಮರಿಯಳು ಒಂದು ದಿನವೆಲ್ಲ ಪ್ರಯಾಣ ಮಾಡಿದರು.
ನಂತರ ಮಗನನ್ನು ಕಾಣದೆ ತಮ್ಮ ಕುಟುಂಬದವರ ಮತ್ತು
ಆಪ್ತಸ್ನೇಹಿತರ ಮಧ್ಯದಲ್ಲಿ ಆತನಿಗಾಗಿ ಹುಡುಕತೊಡಗಿದರು.
45ಆದರೆ ಅಲ್ಲೆಲ್ಲೂ ಕಾಣದೆ ಯೇಸುವನ್ನು ಹುಡುಕಲು
ಜೆರುಸಲೇಮಿಗೆ ಮರಳಿ ಹೋದರು. 46ಮೂರು ದಿನಗಳಾದ
ಮೇಲೆ ಆತನನ್ನು ಕಂಡುಕೊಂಡರು. ಯೇಸುವು ದೇವಾಲಯ
ದಲ್ಲಿ ಧಾರ್ಮಿಕ ಉಪದೇಶಕರೊಡನೆ ಕುಳಿತುಕೊಂಡು ಅವರ
ಉಪದೇಶವನ್ನು ಆಲಿಸುತ್ತಾ ಮತ್ತು ಅವರಿಗೆ ಪ್ರಶ್ನೆಗಳನ್ನು
ಕೇಳುತ್ತಾ ಇದ್ದನು. 47ಆತನ ಮಾತುಗಳನ್ನು ಕೇಳಿ ಆತನ
ತಿಳುವಳಿಕೆಗೂ ಆತನ ಬುದ್ಧಿವಂತಿಕೆಯ ಉತ್ತರಗಳಿಗೂ ಅವ
ರೆಲ್ಲರೂ ಆಶ್ಚರ್ಯಪಟ್ಟರು. 48ಯೇಸುವಿನ ತಂದೆತಾಯಿಗಳು
ಆತನನ್ನು ಅಲ್ಲಿ ಕಂಡು ಆಶ್ಚರ್ಯಪಟ್ಟರು. ಮರಿಯಳು ಆತನಿಗೆ,
''ಮಗನೇ, ನೀನು ನಮಗೆ ಏಕೆ ಹೀಗೆ ಮಾಡಿದೆ? ನಿನ್ನ ತಂದೆ
ಮತ್ತು ನಾನು ನಿನಗಾಗಿ ಬಹಳ ಚಿಂತಿಸುತ್ತಿದ್ದೆವು. ನಿನಗೋಸ್ಕರ
ನಾವು ಹುಡುಕುತ್ತಿದ್ದೆವು'' ಎಂದು ಹೇಳಿದಳು.

49ಯೇಸು ಅವರಿಗೆ, ''ನೀವು ನನಗೋಸ್ಕರ ಏಕೆ ಹುಡುಕ
ಬೇಕಿತ್ತು? ನನ್ನ ತಂದೆಯ (ದೇವರ) ಕೆಲಸ ಎಲ್ಲಿರುತ್ತದೋ
ಅಲ್ಲಿ ನಾನು ಇರಬೇಕು ಎಂಬುದನ್ನು ನೀವು ತಿಳಿದಿರ
ಬೇಕಾಗಿತ್ತು!'' ಎಂದು ಹೇಳಿದನು. 50ಆದರೆ ಆತನ ಮಾತು
ಅವರಿಗೆ ಅರ್ಥವಾಗಲಿಲ್ಲ. 51ಯೇಸು ಅವರೊಡನೆ ನಜರೇತಿಗೆ
ಬಂದು ಅವರಿಗೆ ವಿಧೇಯನಾಗಿದ್ದನು. ಆತನ ತಾಯಿ ಈ
ವಿಷಯಗಳನ್ನೆಲ್ಲಾ ಇನ್ನೂ ಆಲೋಚಿಸುತ್ತಿದ್ದಳು. 52ಯೇಸುವು
ಜ್ಞಾನದಲ್ಲಿಯೂ ದೇಹಬಲದಲ್ಲಿಯೂ ವೃದ್ಧಿಯಾಗುತ್ತಾ
ಬಂದನು. ದೇವರಿಗೂ ಜನರಿಗೂ ಅಚ್ಚುಮೆಚ್ಚಾದನು.

### ಯೋಹಾನನ ಬೋಧನೆ

(ಮತ್ತಾಯ 3:1-12; ಮಾರ್ಕ 1:1-8; ಯೋಹಾನ 1:19-28)

3 ಚಕ್ರವರ್ತಿಯಾದ ತಿಬೇರಿಯಸ್ ಸೀಸರನ ಆಳ್ವಿಕೆಯ
ಹದಿನೈದನೇ ವರ್ಷ ಆದಾಗಿತ್ತು. ಆಗ, ಪೊಂತ್ಯ ಪಿಲಾತನು
ಜುದೇಯ ಪ್ರಾಂತ್ಯಕ್ಕೂ ಹೆರೋದನು ಗಲಿಲೇಯಕ್ಕೂ
ಹೆರೋದನ ಸಹೋದರನಾದ ಫಿಲಿಪ್ಪನು ಇತುರೆಯ ಮತ್ತು
ತ್ರಕೋನಿತಿ ಪ್ರಾಂತ್ಯಗಳಿಗೂ ಲೂಸನ್ಯನು ಅಬಿಲೇನೆ
ಪ್ರಾಂತ್ಯಕ್ಕೂ ಅಧಿಪತಿಯಾಗಿದ್ದರು.

2ಅನ್ನನು ಮತ್ತು ಕಾಯಫನು ಮಹಾಯಾಜಕ
ರಾಗಿದ್ದರು.* ಆ ಸಮಯದಲ್ಲಿ ಜಕರೀಯನ ಮಗನಾದ
ಯೋಹಾನನಿಗೆ ದೇವರಿಂದ ಆಜ್ಞೆಯೊಂದು ಬಂತು. ಯೋಹಾ
ನನು ಗುಡ್ಡಗಾಡಿನಲ್ಲಿ ವಾಸವಾಗಿದ್ದನು. 3ಯೋಹಾನನು
ಜೋರ್ಡನ್ ನದಿಯ ಸುತ್ತಲಿರುವ ಪ್ರದೇಶದಲ್ಲೆಲ್ಲಾ
ಸಂಚರಿಸಿ, ನಿಮ್ಮ ಪಾಪ ಪರಿಹಾರಕ್ಕಾಗಿ ನೀವು ದೇವರ ಕಡೆಗೆ
ತಿರುಗಿಕೊಂಡು ದೀಕ್ಷಾಸ್ನಾನ ಮಾಡಿಸಿಕೊಳ್ಳಬೇಕೆಂದು ಜನರಿಗೆ

---

**ಪ್ರವಾದಿನಿ** ದೇವರ ಸಂದೇಶವನ್ನು ತಿಳಿಸುವ ಸ್ತ್ರೀ.

**ಪಸ್ಕಹಬ್ಬ** ಯೆಹೂದ್ಯರಿಗೆ ಪ್ರಾಮುಖ್ಯವಾದ ಪರಿಶುದ್ಧ ದಿನ. ಮೋಶೆಯ ಕಾಲದಲ್ಲಿ ದೇವರು ಅವರನ್ನು ಈಜಿಪ್ಟಿನ ದಾಸತ್ವದಿಂದ ಬಿಡಿಸಿದ್ದನ್ನು ಜ್ಞಾಪಕ ಮಾಡಿಕೊಳ್ಳುವುದಕ್ಕಾಗಿ ಪ್ರತಿ ವರ್ಷ ಈ ದಿನದಲ್ಲಿ ವಿಶೇಷ ಅಡಿಗೆ ಮಾಡುತ್ತಿದ್ದರು.

**ಮಹಾಯಾಜಕ** ಪ್ರಾಮುಖ್ಯರಾದ ಯೆಹೂದ್ಯಯಾಜಕರು.

ತಿಳಿಸಿದನು. 4ಯೆಶಾಯ ಪ್ರವಾದಿಯು ತನ್ನ ಗ್ರಂಥದಲ್ಲಿ
ಬರೆದಿರುವಂತೆಯೇ ಇದು ನಡೆಯಿತು. ಅದೇನೆಂದರೆ:

‘‘‘ಪ್ರಭುವಿಗಾಗಿ ಮಾರ್ಗವನ್ನು ಸಿದ್ಧಮಾಡಿರಿ.
ಆತನ ಹಾದಿಗಳನ್ನು ನೆಟ್ಟಗೆ ಮಾಡಿರಿ.
5 ಪ್ರತಿಯೊಂದು ಕಣಿವೆಯು ಮುಚ್ಚಲ್ಪಡುವುದು.
ಪ್ರತಿಯೊಂದು ಬೆಟ್ಟಗುಡ್ಡಗಳು ಸಮನಾಗಿ
ಮಾಡಲ್ಪಡುವವು. ಡೊಂಕಾದ ದಾರಿಗಳು
ನೀಟಾಗುವವು. ಕೊರಕಲಾದ ದಾರಿಗಳು
ಸಮವಾಗುವವು.
6 ಪ್ರತಿಯೊಬ್ಬನೂ ದೇವರ ರಕ್ಷಣೆಯನ್ನು ಕಾಣು
ವನು!’ ಎಂಬುದಾಗಿ ಅಡವಿಯಲ್ಲಿ ಒಬ್ಬನು
ಕೂಗುತ್ತಿದ್ದಾನೆ.’’’

*ಯೆಶಾಯ 40:3-5*

7ಜನರು ಯೋಹಾನನಿಂದ ದೀಕ್ಷಾಸ್ನಾನ ಮಾಡಿಸಿಕೊಳ್ಳಲು
ಬಂದರು. ಯೋಹಾನನು ಅವರಿಗೆ, ‘‘ನೀವು ವಿಷಕರವಾದ
ಹಾವುಗಳಂತಿದ್ದೀರಿ! ಬರಲಿರುವ ದೇವರ ಕೋಪದಿಂದ ತಪ್ಪಿಸಿ
ಕೊಳ್ಳುವುದಕ್ಕೆ ನಿಮ್ಮನ್ನು ಎಚ್ಚರಿಸಿದವರು ಯಾರು? 8ನಿಮ್ಮ
ಮನಸ್ಸು ನಿಜವಾಗಿಯೂ ದೇವರ ಕಡೆಗೆ ತಿರುಗಿಕೊಂಡಿರುವು
ದಾದರೆ ಅದನ್ನು ನಿಮ್ಮ ತಕ್ಕಕಾರ್ಯಗಳಿಂದ ತೋರಿಸಿರಿ.
‘ಅಬ್ರಹಾಮನು ನಮ್ಮ ತಂದೆ’ ಎಂದು ಜಂಬ ಕೊಚ್ಚಿಕೊಳ್ಳ
ಬೇಡಿರಿ. ದೇವರು ಅಬ್ರಹಾಮನಿಗೆ ಇಲ್ಲಿರುವ ಕಲ್ಲುಗಳಿಂದ
ಮಕ್ಕಳನ್ನು ಕೊಡಬಲ್ಲನೆಂದು ನಾನು ನಿಮಗೆ ಹೇಳುತ್ತೇನೆ.
9ಮರಗಳನ್ನು * ಕಡಿಯುವುದಕ್ಕೆ ಕೊಡಲಿಯು ಸಿದ್ಧವಾಗಿದೆ.
ಒಳ್ಳೆಯ ಫಲವನ್ನು ಕೊಡದ ಪ್ರತಿಯೊಂದು ಮರವನ್ನು ಕತ್ತರಿಸಿ
ಬೆಂಕಿಯಲ್ಲಿ ಹಾಕಲಾಗುವುದು’’ ಎಂದು ಹೇಳಿದನು.

10ಆದ್ದರಿಂದ ಜನರು, ‘‘ಈಗ ನಾವೇನು ಮಾಡಬೇಕು?’’
ಎಂದು ಕೇಳಿದರು.

11ಯೋಹಾನನು, ‘‘ನಿಮ್ಮಲ್ಲಿ ಎರಡು ಅಂಗಿಗಳಿದ್ದರೆ,
ಏನೂ ಇಲ್ಲದವನಿಗೆ ಒಂದು ಕೊಡಿರಿ. ನಿಮ್ಮಲ್ಲಿ ಆಹಾರವಿದ್ದರೆ,
ಅದನ್ನೂ ಹಂಚಿಕೊಡಿರಿ’’ ಎಂದು ಹೇಳಿದನು. 12ಸುಂಕವಸೂಲಿ
ಗಾರರು* ಸಹ ದೀಕ್ಷಾಸ್ನಾನ ಮಾಡಿಸಿಕೊಳ್ಳಲು ಯೋಹಾನನ
ಬಳಿಗೆ ಬಂದರು. ಅವರು ಯೋಹಾನನಿಗೆ, ‘‘ಉಪದೇಶಕನೇ,
ನಾವೇನು ಮಾಡಬೇಕು?’’ ಎಂದು ಕೇಳಿದರು.

13ಯೋಹಾನನು ಅವರಿಗೆ, ‘‘ನೇಮಕವಾದ ತೆರಿಗೆಗಿಂತ
ಹೆಚ್ಚಾಗಿ ಜನರಿಂದ ತೆಗೆದುಕೊಳ್ಳಬೇಡಿರಿ’’ ಎಂದು ಹೇಳಿದನು.
14ಸೈನಿಕರು ಯೋಹಾನನಿಗೆ, ‘‘ನಾವೇನು ಮಾಡಬೇಕು?’’
ಎಂದು ಕೇಳಿದರು. ಯೋಹಾನನು ಅವರಿಗೆ, ‘‘ಲಂಚ ತೆಗೆದು
ಕೊಳ್ಳಬೇಡಿ, ಸುಳ್ಳುದೂರು ಹೇಳಬೇಡಿರಿ. ನಿಮಗೆ ಸಿಕ್ಕುವ
ಸಂಬಳದಲ್ಲಿ ಸಂತೋಷವಾಗಿರಿ’’ ಎಂದು ಹೇಳಿದನು.

15ಜನರೆಲ್ಲರೂ ಕ್ರಿಸ್ತನ ಆಗಮನವನ್ನು ನಿರೀಕ್ಷಿಸು
ತ್ತಿದ್ದುದರಿಂದ ಅವರು ಯೋಹಾನನ ಬಗ್ಗೆ ಆಶ್ಚರ್ಯಪಟ್ಟು,
‘‘ಒಂದುವೇಳೆ ಈತನೇ ಕ್ರಿಸ್ತನಾಗಿರಬಹುದು’’ ಎಂದು ಭಾವಿಸಿ
ಕೊಂಡರು. 16ಆದಕ್ಕೆ ಯೋಹಾನನು, ‘‘ನಾನು ನಿಮಗೆ ನೀರಿ
ನಲ್ಲಿ ದೀಕ್ಷಾಸ್ನಾನ ಮಾಡಿಸುತ್ತೇನೆ. ಆದರೆ ನನಗಿಂತಲೂ ಶಕ್ತ
ನಾಗಿರುವಾತನು ಬರುತ್ತಾನೆ. ಆತನ ಪಾದರಕ್ಷೆಗಳನ್ನು ಬಿಚ್ಚು
ವದಕ್ಕೂ ನನಗೆ ಯೋಗ್ಯತೆ ಇಲ್ಲ. ಆತನು ನಿಮಗೆ ಪವಿತ್ರಾತ್ಮ
ನಲ್ಲಿಯೂ, ಬೆಂಕಿಯಲ್ಲಿಯೂ ದೀಕ್ಷಾಸ್ನಾನ ಮಾಡಿಸುವನು.
17ಆತನು ರಾಶಿಯನ್ನು ಶುದ್ಧಮಾಡುವುದಕ್ಕೆ* ಸಿದ್ಧನಾಗಿ
ಬರುವನು. ಆತನು ಒಳ್ಳೆಯ ಕಾಳನ್ನು ಹೊಟ್ಟಿನಿಂದ ಬೇರ್ಪಡಿಸಿ
ತನ್ನ ಕಣಜದಲ್ಲಿ ಹಾಕುವನು. ನಂತರ ಹೊಟ್ಟನ್ನು ಆರದ
ಬೆಂಕಿಯಲ್ಲಿ ಸುಟ್ಟುಬಿಡುವನು’’ ಎಂದು ಉತ್ತರಕೊಟ್ಟನು.
18ಯೋಹಾನನು ಜನರಿಗೆ ಇನ್ನೂ ಅನೇಕ ವಿಷಯಗಳನ್ನು ಹೇಳಿ
ಪ್ರೋತ್ಸಾಹಿಸುತ್ತಾ ಸುವಾರ್ತೆಯನ್ನು ಬೋಧಿಸುತ್ತಿದ್ದನು.

### ಯೋಹಾನನ ಸೇವೆಯ ಅಂತ್ಯ

19ರಾಜ್ಯಪಾಲ ಹೆರೋದನು ತನ್ನ ಸಹೋದರನ
ಹೆಂಡತಿಯಾದ ಹೆರೋದ್ಯಳೊಂದಿಗೆ ಹೊಂದಿದ್ದ ಅನೈತಿಕ
ಸಂಬಂಧವನ್ನು ಮತ್ತು ಹೆರೋದನು ಮಾಡಿದ್ದ ಅನೇಕ
ದುಷ್ಕೃತ್ಯಗಳನ್ನು ಯೋಹಾನನು ಖಂಡಿಸಿದನು. 20ಆದ್ದರಿಂದ
ಹೆರೋದನು ಯೋಹಾನನನ್ನು ಸೆರೆಮನೆಗೆ ಹಾಕಿಸಿ ತನ್ನ
ದುಷ್ಕೃತ್ಯಗಳೊಂದಿಗೆ ಮತ್ತೊಂದು ದುಷ್ಕೃತ್ಯವನ್ನು ಸೇರಿಸಿ
ಕೊಂಡನು.

### ಯೋಹಾನನಿಂದ ಯೇಸುವಿನ ದೀಕ್ಷಾಸ್ನಾನ

(ಮತ್ತಾಯ 3:13-17; ಮಾರ್ಕ 1:9-11)

21ಯೋಹಾನನನ್ನು ಸೆರೆಮನೆಗೆ ಹಾಕುವುದಕ್ಕಿಂತ
ಮೊದಲು, ಜನರೆಲ್ಲರೂ ಅವನಿಂದ ದೀಕ್ಷಾಸ್ನಾನ ಮಾಡಿಸಿ
ಕೊಳ್ಳುತ್ತಿದ್ದರು. ಆಗ ಯೇಸು ಸಹ ಬಂದು ದೀಕ್ಷಾಸ್ನಾನ ಮಾಡಿಸಿ
ಕೊಂಡನು. ಯೇಸು ಪ್ರಾರ್ಥಿಸುತ್ತಿದ್ದಾಗ ಆಕಾಶವು ತೆರೆಯಿತು.
22ಪವಿತ್ರಾತ್ಮನು ಆತನ ಮೇಲೆ ಪಾರಿವಾಳದ ರೂಪದಲ್ಲಿ ಇಳಿದು
ಬಂದನು. ಆ ಕೂಡಲೇ, ಪರಲೋಕದಿಂದ ಧ್ವನಿಯೊಂದು
ಹೊರಟು, ‘‘ನೀನು ನನ್ನ ಪ್ರಿಯ ಮಗನು ನಾನು ನಿನ್ನನ್ನು
ಮೆಚ್ಚಿಕೊಂಡಿದ್ದೇನೆ’’ ಎಂದು ಹೇಳಿತು.

### ಯೋಸೇಫನ ಕುಟುಂಬ ಚರಿತ್ರೆ

(ಮತ್ತಾಯ 1:1-17)

23ಯೇಸು ಬೋಧಿಸುವುದಕ್ಕೆ ಪ್ರಾರಂಭಿಸಿದಾಗ ಸುಮಾರು
ಮೂವತ್ತು ವರ್ಷದವನಾಗಿದ್ದನು. ಯೇಸು ಯೋಸೇಫನ
ಮಗನೆಂದು ಜನರು ಭಾವಿಸಿದ್ದರು. ಯೋಸೇಫನು ಹೇಲಿಯ
ಮಗನು. 24ಹೇಲಿಯು ಮತ್ತಾತನ ಮಗನು. ಮತ್ತಾತನು
ಲೇವಿಯ ಮಗನು. ಲೇವಿಯು ಮೆಲ್ಕಿಯ ಮಗನು. ಮೆಲ್ಕಿಯು
ಯನ್ನಾಯನ ಮಗನು. ಯನ್ನಾಯನು ಯೋಸೇಫನ ಮಗನು.
25ಯೋಸೇಫನು ಮತ್ತಥೀಯನ ಮಗನು. ಮತ್ತಥೀಯನು
ಆಮೋಸನ ಮಗನು. ಆಮೋಸನು ನಹೂಮನ ಮಗನು.
ನಹೂಮನು ಎಸ್ಲಿಯ ಮಗನು. ಎಸ್ಲಿಯು ನಗ್ಗಾಯನ ಮಗನು.
26ನಗ್ಗಾಯನು ಮಹಾಥತನ ಮಗನು. ಮಹಾಥತನು

---

**ಮರಗಳನ್ನು** ಯೇಸುವನ್ನು ಅಂಗೀಕರಿಸದ ಜನರು. ಅವರು ಕಡಿಯಲ್ಪಡುವ ‘‘ಮರಗಳಂತೆ’’ ಇದ್ದಾರೆ.

**ಸುಂಕ ವಸೂಲಿಗಾರರು** ತೆರಿಗೆ ವಸೂಲಿಮಾಡುವುದಕ್ಕೆ ರೋಮನ್ನರಿಂದ ಸಂಬಳಕ್ಕೆ ನೇಮಿಸಲ್ಪಟ್ಟ ಯೆಹೂದ್ಯರು. ಅವರು ಆಗಾಗ್ಗೆ ಮೋಸ ಮಾಡುತ್ತಿದ್ದರು. ಆದ್ದರಿಂದ ಯೆಹೂದ್ಯರು ಅವರನ್ನು ದ್ವೇಷಿಸುತ್ತಿದ್ದರು.

**ಶುದ್ಧಿಮಾಡುವುದಕ್ಕೆ** ‘ಯೇಸು ಒಳ್ಳೆಯವರನ್ನು ಕೆಟ್ಟವರಿಂದ ಬೇರ್ಪಡಿಸುವನು’ ಎಂಬುದು ಯೋಹಾನನ ಅರ್ಥವಾಗಿತ್ತು.

ಮತ್ತಥೀಯನ ಮಗನು. ಮತ್ತಥೀಯನು ಶಿಮೀಯನ
ಮಗನು. ಶಿಮೀಯನು ಯೋಸೇಖನ ಮಗನು. ಯೋಸೇಖನು
ಯೂದನ ಮಗನು. 27ಯೂದನು ಯೋಹಾನನ ಮಗನು.
ಯೋಹಾನನು ರೇಸನ ಮಗನು. ರೇಸನು ಜೆರುಬಾಬೆಲನ
ಮಗನು. ಜೆರುಬಾಬೆಲನು ಸಲಥಿಯೇಲನ ಮಗನು.
ಸಲಥಿಯೇಲನು ಸೇರಿಯ ಮಗನು. 28ಸೇರಿಯು ಮೆಲ್ಕಿಯ
ಮಗನು. ಮೆಲ್ಕಿಯು ಅದ್ದಿಯ ಮಗನು. ಅದ್ದಿಯು
ಕೋಸಾಮನ ಮಗನು. ಕೋಸಾಮನು ಎಲ್ಮದಾಮನ ಮಗನು.
ಎಲ್ಮದಾಮನು ಏರನ ಮಗನು. 29ಏರನು ಯೆಹೋಷುವನ
ಮಗನು. ಯೆಹೋಷುವನು ಎಲಿಯೇಜರನ ಮಗನು.
ಎಲಿಯೇಜರನು ಯೋರೈಮನ ಮಗನು. ಯೋರೈಮನು
ಮತ್ತಾತನ ಮಗನು. ಮತ್ತಾತನು ಲೇವಿಯ ಮಗನು.
30ಲೇವಿಯು ಸಿಮೆಯೋನನ ಮಗನು. ಸಿಮೆಯೋನನು
ಯೂದನ ಮಗನು. ಯೂದನು ಯೋಸೇಫನ ಮಗನು.
ಯೋಸೇಫನು ಯೊನಾಮನ ಮಗನು. ಯೊನಾಮನು
ಎಲಿಯಕೀಮನ ಮಗನು. 31ಎಲಿಯಕೀಮನು ಮೆಲೆಯನ
ಮಗನು. ಮಲೆಯನು ಮೆನ್ನನ ಮಗನು. ಮೆನ್ನನು ಮತ್ತಾಥನ
ಮಗನು. ಮತ್ತಾಥನು ನಾತಾನನ ಮಗನು. ನಾತಾನನು
ದಾವೀದನ ಮಗನು. 32ದಾವೀದನು ಇಷಯನ ಮಗನು.
ಇಷಯನು ಓಬೇದನ ಮಗನು. ಓಬೇದನು ಬೋವಜನ
ಮಗನು. ಬೋವಜನು ಸಲ್ಮೋನನ ಮಗನು. ಸಲ್ಮೋನನು
ನಹಸ್ಸೋನನ ಮಗನು. 33ನಹಸ್ಸೋನನು ಅಮ್ಮಿನಾದಾಬನ
ಮಗನು. ಅಮ್ಮಿನಾದಾಬನು ಅದ್ಮಿನನ ಮಗನು. ಅದ್ಮಿನನು
ಅರ್ನೈಯ ಮಗನು. ಅರ್ನೈಯು ಹೆಸ್ರೋನನ ಮಗನು.
ಹೆಸ್ರೋನನು ಪೆರೆಸನ ಮಗನು. ಪೆರೆಸನು ಯೂದನ ಮಗನು.
34ಯೂದನು ಯಾಕೋಬನ ಮಗನು. ಯಾಕೋಬನು
ಇಸಾಕನ ಮಗನು. ಇಸಾಕನು ಅಬ್ರಹಾಮನ ಮಗನು.
ಅಬ್ರಹಾಮನು ತೇರನ ಮಗನು. ತೇರನು ನಹೋರನ ಮಗನು.
35 ನಹೋರನು ಸೆರೂಗನ ಮಗನು. ಸೆರೂಗನು ರೆಗೂವನ
ಮಗನು. ರೆಗೂವನು ಪೆಲೆಗನ ಮಗನು. ಪೆಲೆಗನು ಎಬರನ
ಮಗನು. ಎಬರನು ಸಾಲನ ಮಗನು. 36ಸಾಲನು ಕಯಿನನ
ಮಗನು. ಕಯಿನನು ಅರ್ಪಕ್ಷದನ ಮಗನು. ಅರ್ಪಕ್ಷದನು
ಶೇಮನ ಮಗನು. ಶೇಮನು ನೋಹನ ಮಗನು. ನೋಹನು
ಲಾಮೆಕನ ಮಗನು.

37 ಲಾಮೆಕನು ಮೆತೂಷಲನ ಮಗನು. ಮೆತೂಷಲನು
ಹನೋಕನ ಮಗನು. ಹನೋಕನು ಯೆರೆದನ ಮಗನು.
ಯೆರೆದನು ಮಹಲಲೇಲನ ಮಗನು. ಮಹಲಲೇಲನು
ಕಯಿನಾನನ ಮಗನು. 38ಕಯಿನಾನನು ಎನೋಷನ ಮಗನು.
ಎನೋಷನು ಸೇಥನ ಮಗನು. ಸೇಥನು ಆದಾಮನ ಮಗನು.
ಆದಾಮನು ದೇವರ ಮಗನು.

### ಯೇಸುವಿಗೆ ಸೈತಾನನಿಂದಾದ ಶೋಧನೆ

(ಮತ್ತಾಯ 4-1-11 ಮತ್ತಾಯ 1-12-13)

4 ಯೇಸುವು ಜೋರ್ಡನ್ ನದಿಯಿಂದ ಹಿಂತಿರುಗಿದನು.
ಆತನು ಪವಿತ್ರಾತ್ಮಭರಿತನಾಗಿದ್ದನು. ಪವಿತ್ರಾತ್ಮನು
ಯೇಸುವನ್ನು ಅಡವಿಗೆ ನಡಿಸಿದನು. 2ಅಲ್ಲಿ ಸೈತಾನನು ಆತನನ್ನು
ನಲವತ್ತು ದಿನಗಳವರೆಗೆ ಶೋಧಿಸಿದನು. ಆ ದಿನಗಳಲ್ಲಿ ಯೇಸು
ಏನನ್ನೂ ತಿನ್ನಲಿಲ್ಲ. ತರುವಾಯ, ಯೇಸುವಿಗೆ ಬಹಳ
ಹಸಿವೆಯಾಯಿತು.

3ಆಗ ಸೈತಾನನು ಯೇಸುವಿಗೆ, ‘‘ನೀನು ದೇವರ ಮಗ
ನಾಗಿದ್ದರೆ, ಈ ಕಲ್ಲಿಗೆ ರೊಟ್ಟಿಯಾಗು ಎಂದು ಆಜ್ಞಾಪಿಸು’’
ಎಂದನು.

4ಅದಕ್ಕೆ ಯೇಸು,

> ‘‘‘ರೊಟ್ಟಿ ತಿಂದ ಮಾತ್ರಕ್ಕೆ ಮನುಷ್ಯರು ಬದುಕು
> ವುದಿಲ್ಲ.’’
>
> *ಧರ್ಮೋಪದೇಶ. 8:3*

ಎಂದು ಪವಿತ್ರ ಗ್ರಂಥದಲ್ಲಿ ಬರೆದದೆ’’ ಎಂದು ಉತ್ತರ
ಕೊಟ್ಟನು.

5ಆಗ ಸೈತಾನನು ಯೇಸುವನ್ನು ಕರೆದುಕೊಂಡು ಹೋಗಿ,
ಒಂದೇ ಕ್ಷಣದಲ್ಲಿ ಭೂಲೋಕದ ಎಲ್ಲಾ ರಾಜ್ಯಗಳನ್ನು ತೋರಿಸಿ,
6‘‘ಈ ರಾಜ್ಯಗಳೆಲ್ಲವನ್ನೂ ಇವುಗಳ ಸರ್ವಾಧಿಕಾರವನ್ನೂ
ವೈಭವವನ್ನೂ ನಿನಗೆ ಕೊಡುತ್ತೇನೆ. ಇವುಗಳೆಲ್ಲಾ ನನ್ನ
ಅಧೀನದಲ್ಲಿವೆ. ನಾನು ಯಾರಿಗೆ ಬೇಕಾದರೂ ಇವುಗಳನ್ನು
ಕೊಡಬಲ್ಲೆ. 7ನೀನು ನನ್ನನ್ನು ಆರಾಧಿಸುವುದಾದರೆ ಇವೆಲ್ಲವನ್ನು
ನಾನು ನಿನಗೆ ಕೊಡುತ್ತೇನೆ’’ ಎಂದು ಹೇಳಿದನು.

8ಅದಕ್ಕೆ ಯೇಸು,

> ‘‘‘ನಿನ್ನ ಪ್ರಭುವಾದ ದೇವರೊಬ್ಬನನ್ನೇ ಆರಾಧಿಸ
> ಬೇಕು, ಆತನೊಬ್ಬನಿಗೇ ಸೇವೆ ಮಾಡಬೇಕು’
> ಎಂಬುದಾಗಿ ಪವಿತ್ರ ಗ್ರಂಥದಲ್ಲಿ ಬರೆದಿದೆ!’’
>
> *ಧರ್ಮೋಪದೇಶ. 6:13*

ಎಂದನು. 9ಬಳಿಕ ಸೈತಾನನು ಯೇಸುವನ್ನು ಜೆರುಸ
ಲೇಮಿಗೆ ಕರೆದೊಯ್ದು, ದೇವಾಲಯದ ಬಹು ಎತ್ತರವಾದ
ಸ್ಥಳದಲ್ಲಿ ನಿಲ್ಲಿಸಿ, ‘‘ನೀನು ದೇವರ ಮಗನಾಗಿದ್ದರೆ, ಕೆಳಕ್ಕೆ
ಧುಮುಕು!

> 10‘ದೇವರು ನಿನ್ನನ್ನು ಕಾಪಾಡುವುದಕ್ಕೆ ತನ್ನ
> ದೂತರಿಗೆ ಅಪ್ಪಣೆ ಕೊಡುವನು.’
>
> *ಕೀರ್ತನೆ 91:11*

> 11‘ನಿನ್ನ ಪಾದವು ಕಲ್ಲಿಗೆ ತಗಲೀತೆಂದು ಅವರು ತಮ್ಮ
> ಕೈಗಳಿಂದ ನಿನ್ನನ್ನು ಎತ್ತಿಕೊಳ್ಳುವರು’
>
> *ಕೀರ್ತನೆ 91:12*

ಎಂಬುದಾಗಿ ಶಾಸ್ತ್ರದಲ್ಲಿ ಬರೆದದೆ’’ ಎಂದನು.

12ಅದಕ್ಕೆ ಯೇಸು,

> ‘‘‘ನಿನ್ನ ಪ್ರಭುವಾದ ದೇವರನ್ನು ಪರೀಕ್ಷಿಸಬಾರದು’
>
> *ದರ್ಮೋಪದೇಶ. 6:16*

ಎಂಬುದಾಗಿಯೂ ಬರೆದದೆ'' ಎಂದು ಉತ್ತರಿಸಿದನು.

13ಸೈತಾನನು ಯೇಸುವನ್ನು ನಾನಾ ವಿಧದಲ್ಲಿ ಶೋಧಿಸಿದ
ನಂತರ, ತಕ್ಕಕಾಲ ಬರುವ ತನಕ ಆತನನ್ನು ಬಿಟ್ಟುಹೋದನು.

### ಜನರಿಗೆ ಯೇಸುವಿನ ಉಪದೇಶ

(ಮತ್ತಾಯ 4-12-17; ಮಾರ್ಕ 1-14-15)

14ಯೇಸು ಪವಿತ್ರಾತ್ಮನ ಶಕ್ತಿಯಿಂದ ಕೂಡಿದವನಾಗಿ
ಗಲಿಲೇಯಕ್ಕೆ ಹಿಂತಿರುಗಿ ಹೋದನು. ಯೇಸುವಿನ ಸುದ್ದಿಯು
ಗಲಿಲೇಯದ ಸುತ್ತಮುತ್ತಲಿರುವ ಪ್ರದೇಶದಲ್ಲೆಲ್ಲಾ ಹಬ್ಬಿತು.
15ಯೇಸು ಸಭಾಮಂದಿರಗಳಲ್ಲಿ ಉಪದೇಶಿಸಲು ಪ್ರಾರಂಭಿ
ಸಿದನು. ಜನರೆಲ್ಲರೂ ಆತನನ್ನು ಹೊಗಳಿದರು.

16ಯೇಸು ತಾನು ಬೆಳೆದ ನಜರೇತ್ ಎಂಬ ಊರಿಗೆ
ಪ್ರಯಾಣ ಮಾಡಿದನು. ವಾಡಿಕೆಯ ಪ್ರಕಾರ, ಆತನು ಸಬ್ಬತ್
ದಿನದಲ್ಲಿ ಸಭಾಮಂದಿರಕ್ಕೆ ಹೋದನು. ಯೇಸು ಓದುವು
ದಕ್ಕಾಗಿ ಎದ್ದುನಿಂತನು. 17ಪ್ರವಾದಿಯಾದ ಯೆಶಾಯನ ಗ್ರಂಥ
ವನ್ನು ಆತನಿಗೆ ಓದಲು ಕೊಡಲಾಗಿತ್ತು. ಯೇಸು ಆ ಪುಸ್ತಕವನ್ನು
ತೆರೆದು ಈ ಭಾಗವನ್ನು ಓದಿದನು:

18''ಪ್ರಭುವಿನ (ದೇವರ) ಆತ್ಮವು ನನ್ನಲ್ಲಿ ಇದೆ.
ಬಡಜನರಿಗೆ ಶುಭ ಸಂದೇಶವನ್ನು ತಿಳಿಸಲು
ದೇವರು ನನ್ನನ್ನು ಅಭಿಷೇಕಿಸಿದ್ದಾನೆ. ಪಾಪಕ್ಕೆ
ಸೆರೆಯಾಳುಗಳಾಗಿರುವ ಜನರಿಗೆ 'ನೀವು ಬಿಡು
ಗಡೆಯಾಗಿದ್ದೀರಿ' ಎಂತಲೂ ಕುರುಡರಿಗೆ,
'ನಿಮಗೆ ಮತ್ತೆ ಕಣ್ಣು ಕಾಣಿಸುವುದು' ಎಂತಲೂ
ತಿಳಿಸುವುದಕ್ಕೆ ದೇವರು ನನ್ನನ್ನು ಕಳುಹಿ
ಸಿದ್ದಾನೆ. ದಬ್ಬಾಳಿಕೆಗೆ ಗುರಿಯಾದವರನ್ನು
ಬಿಡಿಸುವುದಕ್ಕೂ
19 ಪ್ರಭುವಿನ ಶುಭ ವರ್ಷವನ್ನು ಪ್ರಕಟಿಸುವುದಕ್ಕೂ
ದೇವರು ನನ್ನನ್ನು ಕಳುಹಿಸಿದ್ದಾನೆ.''
*ಯೆಶಾಯ 61:1-2*

20ಈ ಭಾಗವನ್ನು ಓದಿದ ನಂತರ ಯೇಸು ಆ ಪುಸ್ತಕವನ್ನು
ಮುಚ್ಚಿ ಸಭಾಮಂದಿರದ ಸೇವಕನ ಕೈಗೆ ಕೊಟ್ಟು ಕುಳಿತು
ಕೊಂಡನು. ಸಭಾಮಂದಿರದಲ್ಲಿದ್ದ ಪ್ರತಿಯೊಬ್ಬರು ಯೇಸು
ವನ್ನೇ ದೃಷ್ಟಿಸಿ ನೋಡುತ್ತಿದ್ದರು. 21ಆಗ ಯೇಸು, ಅವರಿಗೆ,
''ನಾನು ಇದೀಗ ಓದಿದ ಮಾತುಗಳನ್ನು ನೀವು ಕೇಳುತ್ತಿ
ದ್ದಾಗಲೇ ಅವು ನಿಜವಾಗಿ ನೆರವೇರಿದವು!'' ಎಂದು ಹೇಳಿದನು.

22ಜನರೆಲ್ಲರೂ ಯೇಸುವನ್ನು ಹೊಗಳತೊಡಗಿದರು.
ಅವರು ಆತನ ಇಂಪಾದ ಮಾತುಗಳಿಗೆ ಆಶ್ಚರ್ಯಪಟ್ಟು,
''ಇವನು ಈ ರೀತಿ ಮಾತಾಡಲು ಹೇಗೆ ಸಾಧ್ಯ? ಇವನು
ಯೋಸೇಫನ ಮಗನಲ್ಲವೇ?'' ಎಂದು ಮಾತಾಡಿಕೊಂಡರು.

23ಯೇಸು ಅವರಿಗೆ, ''ನೀನಂತೂ 'ವೈದ್ಯನೇ, ನಿನ್ನನ್ನೇ ವಾಸಿ
ಮಾಡಿಕೊ' ಎಂಬ ಗಾದೆಯನ್ನು ನನಗೆ ಹೇಳುತ್ತೀರಿ ಎಂಬುದು
ನನಗೆ ಗೊತ್ತು. 'ನೀನು ಕಪೆರ್ನೌಮಿನಲ್ಲಿ ಮಾಡಿದ ಕೆಲವು
ಕಾರ್ಯಗಳ ಬಗ್ಗೆ ನಾವು ಕೇಳಿದ್ದೇವೆ. ಅದೇ ಕಾರ್ಯಗಳನ್ನು
ನಿನ್ನ ಸ್ವಂತ ಊರಿನಲ್ಲಿ ಮಾಡು!' ಎಂದು ಹೇಳಬೇಕೆಂದಿದ್ದೀರಿ.
24ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಪ್ರವಾದಿ ತನ್ನ ಸ್ವಂತ
ಊರಿನಲ್ಲಿ ಸ್ವೀಕೃತನಾಗುವುದಿಲ್ಲ. 25ನಾನು ಹೇಳುವುದು ಸತ್ಯ.
ಎಲೀಯನ ಕಾಲದಲ್ಲಿ ಮೂರುವರೆ ವರ್ಷಗಳವರೆಗೆ ಇಸ್ರೇಲ್
ದೇಶದಲ್ಲಿ ಮಳೆ ಬೀಳಲಿಲ್ಲ. ದೇಶದ ಯಾವ ಕಡೆಯಲ್ಲಿಯೂ
ಆಹಾರವಿರಲಿಲ್ಲ. ಆ ಸಮಯದಲ್ಲಿ ಇಸ್ರೇಲಿನಲ್ಲಿ ಅನೇಕ
ವಿಧವೆಯರು ಇದ್ದರು. 26ಆದರೆ ಎಲೀಯನನ್ನು ಬೇರೆ ಯಾವ
ವಿಧವೆಯರ ಬಳಿಗೂ ಕಳುಹಿಸದೆ ಸಿದೋನ್ ದೇಶಕ್ಕೆ ಸೇರಿದ
ಸರೆಪ್ತ ಊರಿನ ಒಬ್ಬ ವಿಧವೆಯ ಬಳಿಗೆ ಮಾತ್ರ ಕಳುಹಿಸ
ಲಾಯಿತು. 27ಪ್ರವಾದಿಯಾದ ಎಲೀಷನ ಕಾಲದಲ್ಲಿ ಅನೇಕ
ಕುಷ್ಠರೋಗಿಗಳು ಇಸ್ರೇಲಿನಲ್ಲಿ ವಾಸಿಸುತ್ತಿದ್ದರು. ಆದರೆ
ಅವರಲ್ಲಿ ಯಾರಿಗೂ ವಾಸಿಯಾಗದೆ ಸಿರಿಯ ದೇಶದ ನಾಮಾನ
ನೊಬ್ಬನಿಗೇ ವಾಸಿಯಾಯಿತು'' ಎಂದು ಹೇಳಿದನು.

28ಸಭಾಮಂದಿರದಲ್ಲಿದ್ದ ಜನರೆಲ್ಲರೂ ಈ ಮಾತುಗಳನ್ನು
ಕೇಳಿ ಬಹಳವಾಗಿ ಕೋಪಗೊಂಡು, 29ಯೇಸುವನ್ನು ಪಟ್ಟಣ
ದಿಂದ ಹೊರಗಟ್ಟಿದರು. ಆ ಪಟ್ಟಣವು ಒಂದು ಗುಡ್ಡದ
ಮೇಲಿತ್ತು. ಅವರು ಯೇಸುವನ್ನು ಗುಡ್ಡದ ಅಂಚಿಗೆ ಕರೆದು
ಕೊಂಡು ಬಂದು ಕೆಳಕ್ಕೆ ತಳ್ಳಿಬಿಡಬೇಕೆಂದಿದ್ದರು. 30ಆದರೆ
ಯೇಸು ಅವರ ಮಧ್ಯದಲ್ಲಿ ಹಾದು ಹೊರಟುಹೋದನು.

### ದೆವ್ವದಿಂದ ಪೀಡಿತನಾಗಿದ್ದವನಿಗೆ ಬಿಡುಗಡೆ

(ಮಾರ್ಕ 1:21-28)

31ಯೇಸು ಗಲಿಲೇಯದ ಕಪೆರ್ನೌಮ್ ಎಂಬ ಊರಿಗೆ
ಹೋದನು. ಸಬ್ಬತ್‌ದಿನದಂದು ಯೇಸು ಜನರಿಗೆ ಉಪದೇಶಿ
ಸಿದನು. 32ಯೇಸುವಿನ ಉಪದೇಶಕ್ಕೆ ಅವರು ಅತ್ಯಾಶ್ಚರ್ಯ
ಪಟ್ಟರು. ಏಕೆಂದರೆ ಆತನು ಅಧಿಕಾರದಿಂದ ಮಾತಾಡಿದನು.
33ಸಭಾಮಂದಿರದಲ್ಲಿ ದೆವ್ವದಿಂದ ಪೀಡಿತನಾದ ಒಬ್ಬ ಮನುಷ್ಯ
ನಿದ್ದನು. ಅವನು ಗಟ್ಟಿಯಾದ ಧ್ವನಿಯಿಂದ, 34''ನಜರೇತಿನ
ಯೇಸುವೇ! ನಮ್ಮ ಗೊಡವೆ ನಿನಗೇಕೆ? ನಮ್ಮನ್ನು ನಾಶ
ಮಾಡಲು ಇಲ್ಲಿಗೆ ಬಂದಿರುವೆಯಾ? ನೀನು ಯಾರೆಂದು ನಾನು
ಬಲ್ಲೆನು. ನೀನು ದೇವರಿಂದ ಕಳುಹಿಸಲ್ಪಟ್ಟ ಪರಿಶುದ್ಧನು!''
ಎಂದು ಕೂಗಿದನು. 35ಆದರೆ ಯೇಸು ಆ ದೆವ್ವಕ್ಕೆ ''ಸುಮ್ಮನಿರು!
ಇವನನ್ನು ಬಿಟ್ಟು ಹೊರಗೆ ಬಾ!'' ಎಂದು ಆಜ್ಞಾಪಿಸಿದನು.
ದೆವ್ವವು ಅವನನ್ನು ಜನರೆಲ್ಲರ ಎದುರಿನಲ್ಲಿಯೇ ಕೆಡವಿ ಯಾವ
ಕೇಡೂ ಮಾಡದೆ ಬಿಟ್ಟು ಹೋಯಿತು.

36ಜನರೆಲ್ಲರೂ ಬೆರಗಾಗಿ, ''ಎಂಥಾ ಮಾತುಗಳಿವು!
ಆತನು ಅಧಿಕಾರದಿಂದಲೂ ಶಕ್ತಿಯಿಂದಲೂ ದೆವ್ವಗಳಿಗೆ
ಆಜ್ಞಾಪಿಸಲು, ಅವು ಬಿಟ್ಟುಹೋಗುತ್ತವೆಯಲ್ಲಾ'' ಎಂದು
ಮಾತಾಡಿಕೊಂಡರು. 37ಹೀಗಾಗಿ ಯೇಸುವಿನ ಸುದ್ದಿಯು ಆ
ಪ್ರಾಂತ್ಯದಲ್ಲೆಲ್ಲಾ ಹಬ್ಬಿಕೊಂಡಿತು.

### ಯೇಸುವಿನಿಂದ ಗುಣಹೊಂದಿದ ಸ್ತ್ರೀ

(ಮತ್ತಾಯ 8:14-17; ಮಾರ್ಕ 1:29-34)

38ಯೇಸು ಸಭಾಮಂದಿರದಿಂದ ಹೊರಟು ಸೀಮೋನನ*
ಮನೆಗೆ ಹೋದನು. ಸೀಮೋನನ ಅತ್ತೆ ಬಹಳ ಜ್ವರದಿಂದ
ನರಳುತ್ತಿದ್ದಳು. ಆಕೆಗೆ ಸಹಾಯ ಮಾಡಬೇಕೆಂದು ಅಲ್ಲಿದ್ದವರು

---

**ಸೀಮೋನ** ಸೀಮೋನನ ಇನ್ನೊಂದು ಹೆಸರು ಪೇತ್ರ.

ಆತನನ್ನು ಬೇಡಿಕೊಂಡರು. 39ಯೇಸು ಆಕೆಯ ಬಳಿ ನಿಂತು,
ಆಕೆಯನ್ನು ಬಿಟ್ಟುಹೋಗುವಂತೆ ಜ್ವರಕ್ಕೆ ಆಜ್ಞಾಪಿಸಿದನು. ಆ
ಕೂಡಲೇ ಆಕೆಗೆ ಗುಣವಾಯಿತು. ಆಕೆ ಎದ್ದು ಅವರನ್ನು
ಉಪಚರಿಸಿದಳು.

### ಅನೇಕರಿಗೆ ಆರೋಗ್ಯದಾನ

40ಸೂರ್ಯನು ಮುಳುಗಿದ ಮೇಲೆ, ಅಸ್ವಸ್ಥರಾದ ತಮ್ಮ
ಸ್ನೇಹಿತರನ್ನು ಜನರು ಯೇಸುವಿನ ಬಳಿಗೆ ಕರೆದುಕೊಂಡು
ಬಂದರು. ಅವರಿಗೆ ಅನೇಕ ತರಹದ ಕಾಯಿಲೆಗಳಿದ್ದವು.
ಪ್ರತಿಯೊಬ್ಬ ರೋಗಿಯ ಮೇಲೂ ಯೇಸು ತನ್ನ ಕೈಯನ್ನಿಟ್ಟು
ಗುಣಪಡಿಸಿದನು. 41ಅನೇಕ ಜನರೊಳಗಿಂದ ದೆವ್ವಗಳು,
''ನೀನು ದೇವಕುಮಾರ'' ಎಂದು ಆರ್ಭಟಿಸುತ್ತಾ ಬಿಟ್ಟು
ಹೋದವು. ಆದರೆ ಯೇಸು ಆ ದೆವ್ವಗಳಿಗೆ, ''ಮಾತಾಡ
ಕೂಡದೆಂದು'' ಬಲವಾಗಿ ಆಜ್ಞಾಪಿಸಿದನು. ಯೇಸುವೇ
''ಕ್ರಿಸ್ತ'' * ನೆಂದು ದೆವ್ವಗಳಿಗೆ ತಿಳಿದಿತ್ತು.

### ಇತರ ಊರುಗಳಿಗೆ ಯೇಸುವಿನ ಸಂದರ್ಶನ

(ಮಾರ್ಕ 1:35-39)

42ಮರುದಿನ ಯೇಸು ನಿರ್ಜನ ಸ್ಥಳಕ್ಕೆ ಹೋದನು. ಜನರು
ಯೇಸುವಿಗಾಗಿ ಹುಡುಕುತ್ತಾ ಅಲ್ಲಿಗೆ ಬಂದು, ತಮ್ಮನ್ನು ಬಿಟ್ಟು
ಹೋಗದಂತೆ ಆತನನ್ನು ತಡೆಯಲು ಪ್ರಯತ್ನಿಸಿದರು. 43ಆದರೆ
ಯೇಸು ಅವರಿಗೆ, ''ನಾನು ಬೇರೆ ಊರುಗಳವರಿಗೂ ಸಹ
ದೇವರ ರಾಜ್ಯದ ಸುವಾರ್ತೆಯನ್ನು ತಿಳಿಸಬೇಕು. ಇದಕ್ಕಾಗಿಯೇ
ನನ್ನನ್ನು ಕಳುಹಿಸಲಾಗಿದೆ'' ಎಂದು ಹೇಳಿದನು.
44ಬಳಿಕ ಯೇಸು ಜುದೇಯದ ಸಭಾಮಂದಿರಗಳಲ್ಲಿ
ಬೋಧಿಸಿದನು.

### ಯೇಸುವನ್ನು ಹಿಂಬಾಲಿಸಿದ ಪೇತ್ರ, ಯಾಕೋಬ, ಯೋಹಾನ

(ಮತ್ತಾಯ 4:18-22; ಮಾರ್ಕ 1:16-20)

5 ಯೇಸು ಗೆನೆಸರೇತ್ (ಗಲಿಲೇಯ) ಸರೋವರದ ಬಳಿ
ನಿಂತುಕೊಂಡಿದ್ದಾಗ, ದೇವರ ವಾಕ್ಯವನ್ನು ಕೇಳಲು ಅನೇಕ
ಜನರು ನೂಕಾಡುತ್ತಾ ಆತನ ಸುತ್ತಲೂ ಸೇರಿಬಂದರು.
2ಸರೋವರದ ದಡದಲ್ಲಿ ನಿಂತಿದ್ದ ಎರಡು ದೋಣಿಗಳನ್ನು
ಯೇಸು ನೋಡಿದನು. ಬೆಸ್ತರು ತಮ್ಮ ಬಲೆಗಳನ್ನು ತೊಳೆಯು
ತ್ತಿದ್ದರು. 3ಯೇಸು ಸೀಮೋನನ ದೋಣಿಯಲ್ಲಿ ಹತ್ತಿ ಕುಳಿತು
ಕೊಂಡು ದೋಣಿಯನ್ನು ದಡದಿಂದ ಸ್ವಲ್ಪ ದೂರಕ್ಕೆ ನೂಕ
ಬೇಕೆಂದು ಸೀಮೋನನಿಗೆ ಹೇಳಿದನು.
4ಉಪದೇಶ ಮಾಡಿದ ಮೇಲೆ ಯೇಸು ಸೀಮೋನನಿಗೆ,
''ದೋಣಿಯನ್ನು ಆಳವಾದ ನೀರಿನ ಸ್ಥಳಕ್ಕೆ ನಡೆಸಿ, ಮೀನು
ಹಿಡಿಯಲು ನಿಮ್ಮ ಬಲೆಗಳನ್ನು ನೀರಿನಲ್ಲಿ ಹಾಕಿರಿ'' ಎಂದು
ಹೇಳಿದನು.
5ಸೀಮೋನನು, ''ಗುರುವೇ, ನಾವು ರಾತ್ರಿಯೆಲ್ಲಾ
ಪ್ರಯಾಸಪಟ್ಟರೂ ಒಂದು ಮೀನೂ ಸಿಕ್ಕಲಿಲ್ಲ. ಆದರೆ, ನೀನು
ಹೇಳಿದ್ದರಿಂದ ಬೀಸುತ್ತೇವೆ'' ಎಂದನು. 6ಬೆಸ್ತರು ತಮ್ಮ ಬಲೆ
ಗಳನ್ನು ನೀರಿನೊಳಗೆ ಬೀಸಿದಾಗ, ಅವರ ಬಲೆಗಳು ಹರಿದು
ಹೋಗುವಷ್ಟು ಮೀನುಗಳು ರಾಶಿರಾಶಿಯಾಗಿ ಬಲೆಗಳಲ್ಲಿ
ತುಂಬಿಕೊಂಡವು. 7ಆಗ ಅವರು ಮತ್ತೊಂದು ದೋಣಿಯಲ್ಲಿದ್ದ
ತಮ್ಮ ಸ್ನೇಹಿತರಿಗೆ ಸನ್ನೆಮಾಡಿ ಸಹಾಯಕ್ಕಾಗಿ ಕರೆದು
ಕೊಂಡರು. ಅವರೆಲ್ಲರೂ ಮೀನುಗಳನ್ನು ತುಂಬಿಸಲು ದೋಣಿ
ಗಳೆರಡೂ ಮುಳುಗುವಂತಾದವು.
8-9ಇದನ್ನು ಕಂಡ ಬೆಸ್ತರಿಗೆಲ್ಲಾ ವಿಸ್ಮಯವಾಯಿತು.
ಸೀಮೋನ್ ಪೇತ್ರನಂತೂ ಯೇಸುವಿನ ಮುಂದೆ ಮೊಣ
ಕಾಲೂರಿ ''ಪ್ರಭುವೇ ನನ್ನನ್ನು ಬಿಟ್ಟುಹೋಗು, ನಾನು
ಪಾಪಿಯಾಗಿದ್ದೇನೆ!'' ಎಂದನು. 10ಜೆಬೆದಾಯನ ಮಕ್ಕಳಾದ
ಯಾಕೋಬ ಮತ್ತು ಯೋಹಾನರೂ ಆಶ್ಚರ್ಯಪಟ್ಟರು.
(ಇವರಿಬ್ಬರೂ ಸೀಮೋನನ ಪಾಲುಗಾರರಾಗಿದ್ದರು.) ಯೇಸು
ಸೀಮೋನನಿಗೆ, ''ಭಯಪಡಬೇಡ. ಇಂದಿನಿಂದ ನೀನು
ಮೀನನ್ನು ಹಿಡಿಯದೆ, ಮನುಷ್ಯರನ್ನು ಒಟ್ಟುಗೂಡಿಸಲು
ದುಡಿಯುವೆ!'' ಎಂದು ಹೇಳಿದನು.
11ಅವರು ತಮ್ಮ ದೋಣಿಗಳನ್ನು ದಡಕ್ಕೆ ಸಾಗಿಸಿದ ಮೇಲೆ
ಎಲ್ಲವನ್ನು ಬಿಟ್ಟು ಯೇಸುವನ್ನು ಹಿಂಬಾಲಿಸಿದರು.

### ಯೇಸುವಿನಿಂದ ಗುಣಹೊಂದಿದ ಕುಷ್ಠರೋಗಿ

(ಮತ್ತಾಯ 8:1-4; ಮಾರ್ಕ 1:40-45)

12ಒಮ್ಮೆ ಯೇಸು ಒಂದು ಊರಿನಲ್ಲಿದ್ದಾಗ ಕುಷ್ಠರೋಗಿ
ಯೊಬ್ಬನು ಆತನನ್ನು ಕಂಡು, ಆತನ ಮುಂದೆ ಅಡ್ಡಬಿದ್ದು,
''ಪ್ರಭುವೇ, ನೀನು ಮನಸ್ಸು ಮಾಡಿದರೆ ನನ್ನನ್ನು ಗುಣಪಡಿಸ
ಬಲ್ಲೆ ಎಂದು ನನಗೆ ಗೊತ್ತಿದೆ'' ಎಂದು ಬೇಡಿಕೊಂಡನು.
13 ಯೇಸು, ''ನಿನ್ನನ್ನು ಗುಣಪಡಿಸಲು ನನಗೆ ಮನಸ್ಸುಂಟು.
ನಿನಗೆ ಗುಣವಾಗಲಿ!'' ಎಂದು ಹೇಳಿ ಅವನನ್ನು ಮುಟ್ಟಿದನು.
ಕೂಡಲೆ, ಅವನಿಗೆ ಗುಣವಾಯಿತು. 14ಯೇಸು ಅವನಿಗೆ,
''ನಿನಗೆ ಹೇಗೆ ಗುಣವಾಯಿತು ಎಂಬುದರ ಬಗ್ಗೆ ಯಾರಿಗೂ
ಹೇಳದೆ ಯಾಜಕನ ಬಳಿಗೆ ಹೋಗಿ ನಿನ್ನ ಮೈಯನ್ನು ತೋರಿಸಿ
ಮೋಶೆಯ ನಿಯಮಗಳಿಗನುಸಾರವಾಗಿ ಕಾಣಿಕೆಯನ್ನು
ದೇವರಿಗೆ ಸಮರ್ಪಿಸು. ನಿನಗೆ ವಾಸಿಯಾಯಿತೆಂಬುದಕ್ಕೆ ಇದೇ
ಜನರಿಗೆಲ್ಲಾ ಸಾಕ್ಷಿಯಾಗಿರುವುದು'' ಎಂದು ಹೇಳಿದನು. ಆದರೆ
ಯೇಸುವಿನ ಸುದ್ದಿಯು ಹೆಚ್ಚೆಚ್ಚಾಗಿ ಹಬ್ಬಿತು.
15ಅನೇಕ ಜನರು ಆತನ ಬೋಧನೆಗಳನ್ನು ಕೇಳುವುದಕ್ಕೂ
ತಮ್ಮ ಕಾಯಿಲೆಗಳನ್ನು ವಾಸಿಮಾಡಿಸಿಕೊಳ್ಳುವುದಕ್ಕೂ
ಬಂದರು. 16ಯೇಸು ಆಗಾಗ್ಗೆ ನಿರ್ಜನ ಸ್ಥಳಗಳಿಗೆ ಹೋಗಿ
ಪ್ರಾರ್ಥನೆ ಮಾಡುತ್ತಿದ್ದನು.

### ಯೇಸುವಿನಿಂದ ಗುಣಹೊಂದಿದ ಪಾರ್ಶ್ವವಾಯು ರೋಗಿ

(ಮತ್ತಾಯ 9:1-8; ಮಾರ್ಕ 2:1-12)

17ಒಂದು ದಿನ ಯೇಸು ಜನರಿಗೆ ಬೋಧಿಸುತ್ತಿದ್ದನು.
ಫರಿಸಾಯರು ಮತ್ತು ಧರ್ಮೋಪದೇಶಕರು ಸಹ ಅಲ್ಲಿ
ಕುಳಿತುಕೊಂಡಿದ್ದರು. ಅವರು, ಗಲಿಲೇಯದಿಂದಲೂ
ಜುದೇಯ ಪ್ರಾಂತ್ಯದ ಊರುಗಳಿಂದಲೂ ಜೆರುಸಲೇಮಿ
ನಿಂದಲೂ ಬಂದಿದ್ದರು. ರೋಗಿಗಳನ್ನು ಗುಣಪಡಿಸಲು
ಪ್ರಭುವಿನ ಶಕ್ತಿಯು ಆತನಲ್ಲಿತ್ತು. 18ಒಬ್ಬ ಪಾರ್ಶ್ವವಾಯು
ರೋಗಿ ಅಲ್ಲಿದ್ದನು. ಒಂದು ಚಿಕ್ಕ ಹಾಸಿಗೆಯಲ್ಲಿ ಅವನನ್ನು

---

**ಕ್ರಿಸ್ತನು** ಅಭಿಷೇಕಿಸಲ್ಪಟ್ಟವನು (ಮೆಸ್ಸೀಯನು) ಅಥವಾ ದೇವರಿಂದ
ನೇಮಿಸಲ್ಪಟ್ಟವನು.

ಕೆಲವು ಮಂದಿ ಗಂಡಸರು ಹೊತ್ತುಕೊಂಡು ಬಂದು ಯೇಸುವಿನ ಮುಂದೆ ಇಡಲು ಪ್ರಯತ್ನಿಸಿದರು. 19ಆದರೆ ಅಲ್ಲಿ ಬಹಳ ಜನ ಇದ್ದುದರಿಂದ ಯೇಸುವಿನ ಬಳಿಗೆ ಹೋಗಲು ಅವರಿಗೆ ಸಾಧ್ಯವಾಗಲಿಲ್ಲ. ಆದ್ದರಿಂದ ಅವರು ಮನೆಯ ಮೇಲೆ ಹತ್ತಿ ಹೆಂಚುಗಳನ್ನು ತೆಗೆದು ಪಾರ್ಶ್ವವಾಯು ರೋಗಿಯನ್ನು ಹಾಸಿಗೆಯ ಸಹಿತ ಯೇಸುವಿನ ಮುಂದೆ ಇಳಿಸಿದರು. 20ಈ ಜನರ ನಂಬಿಕೆಯನ್ನು ನೋಡಿ ಯೇಸು ಆ ರೋಗಿಗೆ, ''ಸ್ನೇಹಿತನೇ, ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ'' ಎಂದು ಹೇಳಿದನು.

21ಯೆಹೂದ್ಯ ಧರ್ಮೋಪದೇಶಕರು ಮತ್ತು ಫರಿಸಾಯರು, ''ಈ ಮನುಷ್ಯನು (ಯೇಸು) ಯಾರು? ಈತನು ದೇವರಿಗೆ ವಿರುದ್ಧವಾದ ಸಂಗತಿಗಳನ್ನು ಹೇಳುತ್ತಾನಲ್ಲಾ! ದೇವರೊಬ್ಬನೇ ಪಾಪಗಳನ್ನು ಕ್ಷಮಿಸಬಲ್ಲನು'' ಎಂದು ತಮ್ಮೊಳಗೆ ಯೋಚಿಸಿದರು.

22ಆದರೆ ಅವರ ಆಲೋಚನೆಯನ್ನು ತಿಳಿದಿದ್ದ ಯೇಸು ಅವರಿಗೆ, ''ನೀವು ಆ ರೀತಿ ಯೋಚಿಸುವುದೇಕೆ? 23ಯಾವುದು ಸುಲಭ? 'ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ' ಎಂದು ಪಾರ್ಶ್ವವಾಯು ರೋಗಿಗೆ ಹೇಳುವುದೋ? ಅಥವಾ 'ಎದ್ದುನಿಂತು ನಡೆ' ಎನ್ನುವುದೋ? 24ಆದರೆ ಮನುಷ್ಯಕುಮಾರನಿಗೆ* ಭೂಲೋಕದಲ್ಲಿ ಪಾಪಗಳನ್ನು ಕ್ಷಮಿಸುವ ಅಧಿಕಾರ ಉಂಟೆಂಬುದು ನಿಮಗೆ ಖಚಿತವಾಗಬೇಕು''ಎಂದು ಹೇಳಿ, ಪಾರ್ಶ್ವವಾಯು ರೋಗಿಗೆ, ''ಏಳು! ನಿನ್ನ ಹಾಸಿಗೆಯನ್ನು ಹೊತ್ತುಕೊಂಡು ಮನೆಗೆ ಹೋಗು!'' ಎಂದು ಹೇಳಿದನು.

25ಆ ಕೂಡಲೇ ಅವನು ಜನರ ಮುಂದೆ ಎದ್ದು ನಿಂತು, ತನ್ನ ಹಾಸಿಗೆಯನ್ನು ಹೊತ್ತುಕೊಂಡು ದೇವರನ್ನು ಸ್ತುತಿಸುತ್ತಾ ಮನೆಗೆ ಹೋದನು. 26ಜನರೆಲ್ಲರೂ ಬಹಳ ಆಶ್ಚರ್ಯಪಟ್ಟು ದೇವರನ್ನು ಸ್ತುತಿಸತೊಡಗಿದರು ಮತ್ತು ದೇವರಲ್ಲಿ ಭಯ ಭಕ್ತಿಯುಳ್ಳವರಾಗಿ, ''ಈ ದಿನ ನಾವು ಆಶ್ಚರ್ಯಕರವಾದ ಸಂಗತಿಯನ್ನು ಕಂಡೆವು!'' ಎಂದರು.

### ಲೇವಿಯು ಯೇಸುವನ್ನು ಹಿಂಬಾಲಿಸಿದನು

(ಮತ್ತಾಯ 9:9-13; ಮಾರ್ಕ 2:13-17)

27ಬಳಿಕ, ಯೇಸು ಅಲ್ಲಿಂದ ಹೋಗುತ್ತಿರುವಾಗ, ಸುಂಕದ ಕಟ್ಟೆಯಲ್ಲಿ ಕುಳಿತುಕೊಂಡಿದ್ದ ಒಬ್ಬನನ್ನು ಕಂಡನು. ಅವನ ಹೆಸರು ಲೇವಿ. ಯೇಸು ಅವನಿಗೆ, ''ನನ್ನನ್ನು ಹಿಂಬಾಲಿಸು!'' ಎಂದು ಹೇಳಿದನು. 28ಲೇವಿಯು ಎದ್ದು, ಎಲ್ಲವನ್ನೂ ಅಲ್ಲಿಯೇ ಬಿಟ್ಟು ಯೇಸುವನ್ನು ಹಿಂಬಾಲಿಸಿದನು.

29ಬಳಿಕ ಲೇವಿಯು ಯೇಸುವಿಗೆ ತನ್ನ ಮನೆಯಲ್ಲಿ ಒಂದು ದೊಡ್ಡ ಔತಣವನ್ನು ಏರ್ಪಡಿಸಿದನು. ಅನೇಕ ಸುಂಕವಸೂಲಿಗಾರರು ಮತ್ತು ಇನ್ನಿತರ ಜನರು ಸಹ ಊಟಕ್ಕೆ ಕುಳಿತಿದ್ದರು. 30ಆದರೆ ಫರಿಸಾಯರು ಮತ್ತು ಧರ್ಮೋಪದೇಶಕರು ಯೇಸುವಿನ ಶಿಷ್ಯರಿಗೆ, ''ನೀವು ಸುಂಕದವರೊಡನೆ ಮತ್ತು ಇತರ ಕೆಟ್ಟ ಜನರೊಂದಿಗೆ ಏಕೆ ಊಟಮಾಡುತ್ತೀರಿ ಮತ್ತು ಕುಡಿಯುತ್ತೀರಿ?'' ಎಂದು ಆಕ್ಷೇಪಿಸಿದರು.

31ಯೇಸು ಅವರಿಗೆ, ''ವೈದ್ಯನ ಅಗತ್ಯವಿರುವುದು ಆರೋಗ್ಯವಂತರಿಗಲ್ಲ, ಕಾಯಿಲೆಯವರಿಗಷ್ಟೆ. 32ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳಿರಿ ಎಂದು ನೀತಿವಂತರನ್ನು ಕರೆಯಲು ನಾನು ಬಂದವನಲ್ಲ, ಪಾಪಿಗಳನ್ನು ಕರೆಯಲು ಬಂದವನು!'' ಎಂದು ಉತ್ತರಿಸಿದನು.

### ಉಪವಾಸದ ಕುರಿತು ಯೇಸುವಿನ ಉತ್ತರ

(ಮತ್ತಾಯ 9:14-17; ಮಾರ್ಕ 2:18-22)

33ಅವರು ಯೇಸುವಿಗೆ, ''ಫರಿಸಾಯರ ಹಿಂಬಾಲಕರು ಉಪವಾಸವಿದ್ದು ಪ್ರಾರ್ಥಿಸುತ್ತಾರೆ. ಯೋಹಾನನ ಶಿಷ್ಯರು ಆಗಾಗ್ಗೆ ಉಪವಾಸವಿದ್ದು ಪ್ರಾರ್ಥಿಸುತ್ತಾರೆ. ನಿನ್ನ ಶಿಷ್ಯರಾದರೋ ಯಾವಾಗಲೂ ತಿಂದು ಕುಡಿಯುವುದರಲ್ಲೇ ಇದ್ದಾರೆ'' ಎಂದು ಟೀಕಿಸಿದರು. 34ಯೇಸು ಅವರಿಗೆ, ''ಮದುವೆಯಲ್ಲಿ ಮದುಮಗನ ಸಂಗಡ ಇರುವ ಅವನ ಸ್ನೇಹಿತರಿಗೆ ನೀವು ಉಪವಾಸ ಮಾಡಿ ಎಂದು ಹೇಳಲು ಸಾಧ್ಯವಿಲ್ಲ. 35ಆದರೆ ಮದುಮಗನು ಅವರ ಬಳಿಯಿಂದ ಹೊರಟುಹೋಗುವ ಕಾಲ ಬರುತ್ತದೆ. ಆಗ ಅವನ ಸ್ನೇಹಿತರು ಉಪವಾಸ ಮಾಡುವರು'' ಎಂದು ಉತ್ತರ ಕೊಟ್ಟನು.

36ಬಳಿಕ ಯೇಸು ಅವರಿಗೆ ಈ ಸಾಮ್ಯವನ್ನು ಹೇಳಿದನು: ''ಹಳೆ ಅಂಗಿಗೆ ತೇಪೆ ಹಚ್ಚುವುದಕ್ಕಾಗಿ ಹೊಸ ಅಂಗಿಯಿಂದ ಬಟ್ಟೆಯನ್ನು ಯಾರೂ ಹರಿದುಕೊಳ್ಳುವುದಿಲ್ಲ. ಹಾಗೆ ಮಾಡಿದ್ದೇಯಾದರೆ, ಹೊಸ ಅಂಗಿಯನ್ನು ಕೆಡಿಸಿಕೊಂಡಂತಾಗುತ್ತದೆ. ಅಲ್ಲದೆ ಹೊಸ ಅಂಗಿಯ ಬಟ್ಟೆಯು ಹಳೆ ಅಂಗಿಗೆ ಹೋಲುವುದೂ ಇಲ್ಲ. 37 ಅಂತೆಯೇ ಹೊಸ ದ್ರಾಕ್ಷಾರಸವನ್ನು ಹಳೆಯ ದ್ರಾಕ್ಷಾರಸದ ಚೀಲಗಳಲ್ಲಿ ಯಾರೂ ತುಂಬಿಡುವುದಿಲ್ಲ. ಒಂದುವೇಳೆ ತುಂಬಿದರೆ, ಹೊಸ ದ್ರಾಕ್ಷಾರಸವು ಚೀಲಗಳನ್ನು ಒಡೆದುಹಾಕುವುದರಿಂದ ದ್ರಾಕ್ಷಾರಸವೂ ಚೆಲ್ಲಿಹೋಗುತ್ತದೆ, ಚೀಲಗಳೂ ಹಾಳಾಗುತ್ತವೆ. 38ಜನರು ಯಾವಾಗಲೂ ಹೊಸ ದ್ರಾಕ್ಷಾರಸವನ್ನು ಹೊಸ ದ್ರಾಕ್ಷಾರಸದ ಚೀಲಗಳಲ್ಲಿ ತುಂಬಿಡುತ್ತಾರೆ. 39ಹಳೆಯ ದ್ರಾಕ್ಷಾರಸವನ್ನು ಕುಡಿದವನಿಗೆ ಹೊಸ ದ್ರಾಕ್ಷಾರಸವು ರುಚಿಸುವುದಿಲ್ಲ. ಅವನು ಹಳೆಯ ದ್ರಾಕ್ಷಾರಸವನ್ನೇ ಇಷ್ಟಪಡುತ್ತಾನೆ.''

### ಯೇಸು ಸಬ್ಬತ್ ದಿನಕ್ಕೆ ಒಡೆಯನು

(ಮತ್ತಾಯ 12:1-8; ಮಾರ್ಕ 2:23-28)

6 ಒಂದಾನೊಂದು ಸಬ್ಬತ್ ದಿನದಲ್ಲಿ ಯೇಸು ಪೈರಿನ ಹೊಲಗಳನ್ನು ಹಾದುಹೋಗುತ್ತಿದ್ದನು. ಆತನ ಶಿಷ್ಯರು ತೆನೆಗಳನ್ನು ಕಿತ್ತು, ಕೈಗಳಲ್ಲಿ ಹೊಸಕಿ ಕಾಳನ್ನು ತಿಂದರು. 2ಕೆಲವು ಫರಿಸಾಯರು, ''ನೀವು ಸಬ್ಬತ್ ದಿನದಲ್ಲಿ ಹೀಗೆ ಮಾಡುವುದು ಮೋಶೆಯ ಧರ್ಮಶಾಸ್ತ್ರಕ್ಕೆ ವಿರುದ್ಧವಾಗಿದೆ'' ಎಂದು ಹೇಳಿದರು.

3ಅದಕ್ಕೆ ಯೇಸು, ''ದಾವೀದನು ಮತ್ತು ಅವನ ಸಂಗಡಿಗರು ಹಸಿದಿದ್ದಾಗ ದಾವೀದನು ಏನು ಮಾಡಿದನೆಂಬುದನ್ನು ನೀವು ಓದಿದ್ದೀರಿ. 4ದಾವೀದನು ದೇವರ ಮಂದಿರದೊಳಕ್ಕೆ ಹೋಗಿ, ದೇವರಿಗೆ ಸಮರ್ಪಿಸಿದ್ದ ರೊಟ್ಟಿಯನ್ನು ತೆಗೆದುಕೊಂಡು ತಿಂದನು. ತನ್ನ ಜೊತೆ ಇದ್ದ ಜನರಿಗೂ ಸ್ವಲ್ಪ ಕೊಟ್ಟನು. ಇದು ಮೋಶೆಯ ಧರ್ಮಶಾಸ್ತ್ರಕ್ಕೆ ವಿರುದ್ಧ. ಯಾಜಕರು ಮಾತ್ರವೇ ಈ ರೊಟ್ಟಿಯನ್ನು ತಿನ್ನಬಹುದು ಎಂದು ಧರ್ಮಶಾಸ್ತ್ರ ಹೇಳು

---

**ಮನುಷ್ಯಕುಮಾರನು** ಯೇಸು. ದಾನಿಯೇಲ 7:13-14ರಲ್ಲಿ ದೇವರು ತನ್ನ ಜನರನ್ನು ರಕ್ಷಿಸಲು ಆರಿಸಿಕೊಂಡ ಮೆಸ್ಸೀಯನಿಗೆ ಈ ಹೆಸರು ಕೊಡಲಾಗಿದೆ.

ತ್ತದೆ'' ಎಂದು ಉತ್ತರಿಸಿ 5''ಮನುಷ್ಯಕುಮಾರನು ಸಬ್ಬತ್
ದಿನಕ್ಕೂ ಒಡೆಯನಾಗಿದ್ದಾನೆ'' ಎಂದು ಹೇಳಿದನು.

### ಯೇಸುವಿನಿಂದ ಸಬ್ಬತ್ ದಿನದಲ್ಲಿ ಗುಣಹೊಂದಿದ ವ್ಯಕ್ತಿ

(ಮತ್ತಾಯ 12:9-14; ಮಾರ್ಕ 3:1-6)

6ಮತ್ತೊಂದು ಸಬ್ಬತ್‌ದಿನದಲ್ಲಿ ಯೇಸು ಸಭಾಮಂದಿರಕ್ಕೆ
ಹೋಗಿ ಜನರಿಗೆ ಉಪದೇಶಿಸಿದನು. ಬಲಗೈ ಬತ್ತಿಹೋಗಿದ್ದ
ಒಬ್ಬ ಮನುಷ್ಯನು ಅಲ್ಲಿದ್ದನು. 7ಯೇಸು ಅವನನ್ನು
ವಾಸಿಮಾಡಿದರೆ, ಆತನ ಮೇಲೆ ತಪ್ಪುಹೊರಿಸಬಹುದೆಂದು
ಧರ್ಮೋಪದೇಶಕರು ಮತ್ತು ಫರಿಸಾಯರು ಹೊಂಚುಹಾಕಿ
ನೋಡುತ್ತಿದ್ದರು. 8ಆದರೆ ಅವರ ಆಲೋಚನೆಯು ಯೇಸುವಿಗೆ
ತಿಳಿದಿತ್ತು. ಯೇಸುವು ಕೈ ಬತ್ತಿಹೋಗಿದ್ದ ಮನುಷ್ಯನಿಗೆ, ''ಬಂದು
ಇಲ್ಲಿ ನಿಂತುಕೊ'' ಎಂದು ಹೇಳಿದನು. ಅವನು ಎದ್ದು ಬಂದು
ನಿಂತನು. 9ಆಗ ಯೇಸು ಅವರಿಗೆ, ''ಸಬ್ಬತ್‌ದಿನದಲ್ಲಿ ಯಾವ
ಕಾರ್ಯವನ್ನು ಮಾಡುವುದು ಸರಿ? ಒಳ್ಳೆಯ ಕಾರ್ಯವನ್ನೇ
ಅಥವಾ ಕೆಟ್ಟ ಕಾರ್ಯವನ್ನೇ? ಜೀವವನ್ನು ಉಳಿಸುವುದೇ?
ಅಥವಾ ನಾಶ ಮಾಡುವುದೇ?'' ಎಂದು ಕೇಳಿದನು. 10ಯೇಸು
ಸುತ್ತಲೂ ನಿಂತಿದ್ದ ಅವರೆಲ್ಲರನ್ನು ನೋಡಿ, ಆ ಮನುಷ್ಯನಿಗೆ,
''ನಿನ್ನ ಕೈಯನ್ನು ನನಗೆ ತೋರಿಸು'' ಎಂದನು. ಅವನು ತನ್ನ
ಕೈಯನ್ನು ಚಾಚಿದನು. ಆ ಕೂಡಲೇ ಅವನ ಕೈ ವಾಸಿಯಾಯಿತು.
11ಫರಿಸಾಯರು ಮತ್ತು ಧರ್ಮೋಪದೇಶಕರು ಬಹಳವಾಗಿ
ಕೋಪಗೊಂಡರು. ಅವರು, ''ನಾವು ಯೇಸುವಿಗೆ ಏನು
ಮಾಡೋಣ?'' ಎಂದು ತಮ್ಮತಮ್ಮೊಳಗೆ ಸಂಚು ಮಾಡಿದರು.

### ಯೇಸುವಿನ ಹನ್ನೆರಡು ಮಂದಿ ಅಪೊಸ್ತಲರು

(ಮತ್ತಾಯ 10:1-4; ಮಾರ್ಕ 3:13-19)

12ಆ ಸಮಯದಲ್ಲಿ ಯೇಸು ಪ್ರಾರ್ಥನೆ ಮಾಡುವುದಕ್ಕಾಗಿ
ಬೆಟ್ಟಕ್ಕೆ ಹೋದನು. ದೇವರಲ್ಲಿ ಪ್ರಾರ್ಥಿಸುತ್ತಾ ರಾತ್ರಿಯೆಲ್ಲಾ
ಅಲ್ಲೇ ಇದ್ದನು. 13ಮರುದಿನ ಬೆಳಿಗ್ಗೆ, ಯೇಸು ತನ್ನ ಶಿಷ್ಯರನ್ನು
ಕರೆದನು. ಅವರಲ್ಲಿ ಹನ್ನೆರಡು ಮಂದಿಯನ್ನು ಆತನು ಆರಿಸಿ
ಕೊಂಡನು. ಯೇಸು ಈ ಹನ್ನೆರಡು ಜನರಿಗೆ, ''ಅಪೊಸ್ತಲರು''
ಎಂದು ಹೆಸರಿಟ್ಟನು. 14ಅವರು ಯಾರೆಂದರೆ: ಸೀಮೋನ
(ಯೇಸು ಅವನಿಗೆ ಪೇತ್ರನೆಂದು ಹೆಸರಿಟ್ಟನು.) ಮತ್ತು ಪೇತ್ರನ
ಸಹೋದರನಾದ ಅಂದ್ರೆಯ, ಯಾಕೋಬ ಮತ್ತು ಯೋಹಾನ,
ಫಿಲಿಪ್ಪ ಮತ್ತು ಬಾರ್ತೊಲೊಮಾಯ, 15ಮತ್ತಾಯ, ತೋಮ,
ಯಾಕೋಬ (ಅಲ್ಫಾಯನ ಮಗ) ಮತ್ತು ದೇಶಾಭಿಮಾನಿ*
ಎನಿಸಿಕೊಂಡಿದ್ದ ಸಿಮೋನ, 16ಯೂದ (ಯಾಕೋಬನ ಮಗ)
ಮತ್ತು ಇಸ್ಕರಿಯೋತ ಯೂದ (ಯೇಸುವಿಗೆ ದ್ರೋಹ
ಮಾಡಿದವನು ಇವನೇ.)

### ಯೇಸುವಿನ ಉಪದೇಶ ಮತ್ತು ಜನರಿಗೆ ಆರೋಗ್ಯದಾನ

(ಮತ್ತಾಯ 4:23-25; 5:1-12)

17ಯೇಸು ಮತ್ತು ಅಪೊಸ್ತಲರು ಬೆಟ್ಟದಿಂದಿಳಿದು
ಸಮತಟ್ಟಾದ ಸ್ಥಳಕ್ಕೆ ಬಂದರು. ಆತನ ಹಿಂಬಾಲಕರ ಒಂದು
ದೊಡ್ಡ ಗುಂಪು ಅಲ್ಲಿ ನೆರೆದಿತ್ತು. ಜುದೇಯ ಪ್ರಾಂತ್ಯದಿಂದಲೂ
ಜೆರುಸಲೇಮಿನಿಂದಲೂ ಸಮುದ್ರ ತೀರದ ಟೈರ್ ಮತ್ತು
ಸಿದೋನ್ ಪಟ್ಟಣಗಳಿಂದಲೂ ಜನಸಮೂಹವು ಅಲ್ಲಿಗೆ
ಬಂದಿತ್ತು.
18ಅವರೆಲ್ಲರು ಯೇಸುವಿನ ಉಪದೇಶವನ್ನು ಕೇಳು
ವುದಕ್ಕೂ ಆತನಿಂದ ವಾಸಿಮಾಡಿಸಿಕೊಳ್ಳುವುದಕ್ಕೂ ಬಂದಿ
ದ್ದರು. ದೆವ್ವಗಳಿಂದ ಪೀಡಿತರಾಗಿದ್ದ ಜನರನ್ನು ಯೇಸು
ವಾಸಿಮಾಡಿದನು. 19ಜನರೆಲ್ಲರೂ ಯೇಸುವನ್ನು ಮುಟ್ಟು
ವುದಕ್ಕೆ ಪ್ರಯತ್ನಿಸಿದರು, ಏಕೆಂದರೆ ಆತನಿಂದ ಶಕ್ತಿಯು ಹರಿದು
ಬಂದು ಎಲ್ಲರನ್ನೂ ಗುಣಪಡಿಸುತ್ತಿತ್ತು!
20ಯೇಸು ತನ್ನ ಶಿಷ್ಯರನ್ನು ನೋಡಿ ಹೇಳಿದ್ದೇನೆಂದರೆ,

''ಬಡವರಾದ ನೀವು ಧನ್ಯರು. ದೇವರ ರಾಜ್ಯವು
ನಿಮ್ಮದೇ.
21 ಹಸಿವೆಗೊಂಡಿರುವ ನೀವು ಧನ್ಯರು; ನಿಮಗೆ
ತೃಪ್ತಿಯಾಗುವುದು. ಅಳುತ್ತಿರುವ ನೀವು
ಧನ್ಯರು; ಆನಂದದಿಂದ ನೀವು ನಗುವಿರಿ.

22''ನೀವು ಮನುಷ್ಯಕುಮಾರನಿಗೆ ಸೇರಿದವರಾಗಿರುವುದ
ರಿಂದ ಜನರು ನಿಮ್ಮನ್ನು ದ್ವೇಷಿಸಿದರೆ, ತುಚ್ಛೀಕರಿಸಿದರೆ,
ಅವಮಾನ ಮಾಡಿದರೆ, ನಿಮ್ಮನ್ನು ಕೆಟ್ಟವರೆಂದು ಹೇಳಿದರೆ
ನೀವು ಧನ್ಯರು. 23ಆ ಸಮಯದಲ್ಲಿ ಆನಂದಪಡಿರಿ. ಏಕೆಂದರೆ
ಪರಲೋಕದಲ್ಲಿ ನಿಮಗೆ ಬಹಳ ಫಲ ಸಿಕ್ಕುವುದು. ಈ ಜನರು
ನಿಮಗೆ ಮಾಡಿದಂತೆಯೇ ಅವರ ಪಿತೃಗಳು ಪ್ರವಾದಿಗಳಿಗೆ
ಮಾಡಿದರು.

24''ಐಶ್ವರ್ಯವಂತರೇ, ನಿಮ್ಮ ಗತಿಯನ್ನು ಏನು
ಹೇಳಲಿ! ನೀವು ಸುಖಕರವಾದ ಜೀವನವನ್ನು
ಅನುಭವಿಸಿದಿರಿ.
25 ಈಗ ಹೊಟ್ಟೆ ತುಂಬಿರುವ ಜನರೇ, ನಿಮ್ಮ
ಗತಿಯನ್ನು ಏನು ಹೇಳಲಿ! ನೀವು ಹಸಿಯುವಿರಿ.
ನಗುವ ಜನರೇ, ನಿಮ್ಮ ಗತಿಯನ್ನು ಏನು
ಹೇಳಲಿ! ನೀವು ದುಃಖಪಡುವಿರಿ ಮತ್ತು
ಅಳುವಿರಿ.

26''ಜನರಿಂದ ಯಾವಾಗಲೂ ಹೊಗಳಿಸಿಕೊಳ್ಳುವವರೇ,
ನಿಮ್ಮ ಗತಿಯನ್ನು ಏನು ಹೇಳಲಿ! ಅವರ ಪಿತೃಗಳು ಸುಳ್ಳು
ಪ್ರವಾದಿಗಳನ್ನು ಯಾವಾಗಲೂ ಹೊಗಳುತ್ತಿದ್ದರು.

### ನಿಮ್ಮ ವೈರಿಗಳನ್ನು ಪ್ರೀತಿಸಿರಿ

(ಮತ್ತಾಯ 5:38-48; 7:12)

27''ನನ್ನ ಮಾತುಗಳನ್ನು ಆಲಿಸುತ್ತಿರುವ ನಿಮಗೆ ನಾನು
ಹೇಳುವುದೇನಂದರೆ: ನಿಮ್ಮ ವೈರಿಗಳನ್ನು ಪ್ರೀತಿಸಿರಿ. ನಿಮ್ಮನ್ನು
ದ್ವೇಷಿಸುವವರಿಗೆ ಒಳ್ಳೆಯದನ್ನು ಮಾಡಿರಿ. 28ನಿಮ್ಮನ್ನು
ಶಪಿಸುವವರನ್ನು ಆಶೀರ್ವದಿಸಿರಿ. ನಿಮ್ಮನ್ನು ಹೀನೈಸುವ
ಜನರಿಗೋಸ್ಕರ ಪ್ರಾರ್ಥಿಸಿರಿ. 29ಒಬ್ಬನು ನಿನ್ನ ಕೆನ್ನೆಗೆ ಹೊಡೆ
ದರೆ, ಅವನಿಗೆ ಮತ್ತೊಂದು ಕೆನ್ನೆಯನ್ನು ಒಡ್ಡು. ಒಬ್ಬನು ನಿನ್ನ

---

**ದೇಶಾಭಿಮಾನಿ** ಅಕ್ಷರಶಃ ಉಗ್ರಗಾಮಿ. ಸ್ವಾತಂತ್ರ್ಯಕ್ಕಾಗಿ ಹೋರಾಡುತ್ತಿದ್ದ ಯೆಹೂದ್ಯರ ರಾಜಕೀಯ ಪಂಗಡಕ್ಕೆ ಸೇರಿದವನಾಗಿದ್ದನು.

ಮೇಲಂಗಿಯನ್ನು ಕೇಳಿದರೆ, ಅವನಿಗೆ ನಿನ್ನ ಒಳಂಗಿಯನ್ನೂ
ಕೊಡು. 30 ನಿನ್ನನ್ನು ಬೇಡುವ ಪ್ರತಿಯೊಬ್ಬನಿಗೆ ಕೊಡು. ಒಬ್ಬನು
ನಿನ್ನಿಂದ ಏನಾದರೂ ತೆಗೆದುಕೊಂಡಾಗ ಅದನ್ನು ಹಿಂದಕ್ಕೆ
ಕೊಡೆಂದು ಕೇಳಬೇಡ. 31 ನಿಮಗೆ ಬೇರೆ ಜನರು ಏನು
ಮಾಡಬೇಕೆಂದು ಆಸೆಪಡುತ್ತೀರೋ ಅದನ್ನೇ ನೀವು ಅವರಿಗೆ
ಮಾಡಿರಿ. 32 ನಿಮ್ಮನ್ನು ಪ್ರೀತಿಸುವ ಜನರನ್ನೇ ನೀವು ಪ್ರೀತಿಸಿದರೆ,
ನಿಮಗೆ ಹೊಗಳಿಕೆ ಏಕೆ ಬರಬೇಕು? ಇಲ್ಲ! ತಮ್ಮನ್ನು
ಪ್ರೀತಿಸುವವರನ್ನು ಪಾಪಿಷ್ಠರು ಸಹ ಪ್ರೀತಿಸುತ್ತಾರೆ! 33 ನಿಮಗೆ
ಒಳ್ಳೆಯದನ್ನು ಮಾಡುವವರಿಗೇ ನೀವು ಒಳ್ಳೆಯದನ್ನು
ಮಾಡಿದರೆ, ಅದರಿಂದ ನಿಮಗೆ ಹೊಗಳಿಕೆ ಬರುವುದೇ?
ಪಾಪಿಷ್ಠರು ಸಹ ಹಾಗೆಯೇ ಮಾಡುತ್ತಾರೆ! 34 ನೀವು ಯಾರಿ
ಗಾದರೂ ಸಾಲಕೊಟ್ಟು, ಅದನ್ನು ಪೂರ್ತಿಯಾಗಿ ಮತ್ತೆ
ಅವರಿಂದ ತೆಗೆದುಕೊಂಡರೆ ಅದರಿಂದ ನಿಮಗೆ ಹೊಗಳಿಕೆ
ಬರುವುದೇ? ಪಾಪಿಷ್ಠರು ಸಹ ಸಾಲಕೊಟ್ಟು ಮತ್ತೆ ಅದನ್ನು
ಪೂರ್ತಿಯಾಗಿ ಮರಳಿ ಪಡೆಯುತ್ತಾರೆ! 35 ಆದ್ದರಿಂದ ನಿಮ್ಮ
ವೈರಿಗಳನ್ನು ಪ್ರೀತಿಸಿರಿ. ಅವರಿಗೆ ಒಳ್ಳೆಯದನ್ನು ಮಾಡಿರಿ. ನೀವು
ಅವರಿಗೆ ಸಾಲ ಕೊಡುವಾಗ ಮತ್ತೆ ಅವರಿಂದ ಪಡೆಯ
ಬಹುದೆಂಬ ನಿರೀಕ್ಷೆಯಿಲ್ಲದೆ ಕೊಡಿರಿ. ಆಗ ನಿಮಗೆ ದೊಡ್ಡ
ಪ್ರತಿಫಲವಿರುವುದು. ನೀವು ಮಹೋನ್ನತನಾದ ದೇವರ
ಮಕ್ಕಳಾಗುವಿರಿ. ಏಕೆಂದರೆ ದೇವರು ಪಾಪಿಷ್ಠರಿಗೂ ಕೃತಜ್ಞತೆ
ಯಿಲ್ಲದವರಿಗೂ ಒಳ್ಳೆಯವನಾಗಿದ್ದಾನೆ. 36 ನಿಮ್ಮ ಪರಲೋಕದ
ತಂದೆಯು ಕರುಣಾಮಯನಾಗಿರುವಂತೆ ನೀವೂ ಕರುಣೆ
ಯುಳ್ಳವರಾಗಿರಿ.

## ನಿನ್ನನ್ನು ಪರೀಕ್ಷಿಸಿಕೊ

(ಮತ್ತಾಯ 7:1-5)

37 ‘‘ಬೇರೆಯವರಿಗೆ ತೀರ್ಪು ಮಾಡಬೇಡಿರಿ, ಆಗ ನಿಮಗೂ
ತೀರ್ಪಾಗುವುದಿಲ್ಲ. ಬೇರೆಯವರನ್ನು ಅಪರಾಧಿಗಳೆಂದು
ನಿರ್ಣಯಿಸಬೇಡಿರಿ, ಆಗ ನಿಮ್ಮನ್ನೂ ಅಪರಾಧಿಗಳೆಂದು
ನಿರ್ಣಯಿಸುವುದಿಲ್ಲ. ಇತರರನ್ನು ಕ್ಷಮಿಸಿರಿ, ಆಗ ನಿಮಗೂ
ಕ್ಷಮಾಪಣೆ ಆಗುವುದು. 38 ಇತರರಿಗೆ ಕೊಡಿರಿ, ಆಗ ನಿಮಗೂ
ದೊರೆಯುವುದು. ಪಾತ್ರೆಯಲ್ಲಿ ಅದುಮಿ, ಅಲ್ಲಾಡಿಸಿ ಹೊರ
ಚೆಲ್ಲುವಂತೆ ಅಳೆದು ನಿಮ್ಮ ಸೆರಗಿಗೆ ಹಾಕುವರು. ನೀವು
ಅಳೆಯುವ ಅಳತೆಯಿಂದಲೇ ನಿಮಗೂ ಅಳೆದುಕೊಡುವರು.’’
39 ಯೇಸು ಅವರಿಗೆ ಈ ಸಾಮ್ಯವನ್ನೂ ಹೇಳಿದನು: ‘‘ಒಬ್ಬ
ಕುರುಡನು ಇನ್ನೊಬ್ಬ ಕುರುಡನನ್ನು ನಡಿಸುವುದಕ್ಕಾದೀತೇ?
ಇಲ್ಲ! ಅವರಿಬ್ಬರೂ ಗುಂಡಿಯಲ್ಲಿ ಬೀಳುವರು. 40 ಶಿಷ್ಯನು
ಗುರುವಿಗಿಂತ ಮೇಲಲ್ಲ. ಆದರೆ, ಶಿಷ್ಯನು ಪೂರ್ಣ ಕಲಿತಾಗ
ಗುರುವಿನಂತೆ ಆಗುವನು. 41 ‘‘ನಿನ್ನ ಕಣ್ಣಿನಲ್ಲಿರುವ ತೊಲೆ
ಯನ್ನು ನೋಡದೆ, ನಿನ್ನ ಸಹೋದರನ ಕಣ್ಣಿನಲ್ಲಿರುವ
ಅಣುವನ್ನು ನೀನು ಗಮನಿಸುವುದೇಕೆ? 42 ನೀನು ಅವನಿಗೆ,
‘ಸಹೋದರನೇ, ನಿನ್ನ ಕಣ್ಣಿನಲ್ಲಿರುವ ಅಣುವನ್ನು ತೆಗೆಯು
ತ್ತೇನೆ’ ಎಂದು ನೀನು ಹೇಗೆ ಹೇಳಬಲ್ಲೆ? ನಿನ್ನ ಸ್ವಂತ
ಕಣ್ಣಿನಲ್ಲಿರುವ ತೊಲೆಯೇ ನಿನಗೆ ಕಾಣಿಸದು! ನೀನು ಕಪಟಿ.*
ಮೊದಲು ನಿನ್ನ ಕಣ್ಣಿನಲ್ಲಿರುವ ತೊಲೆಯನ್ನು ತೆಗೆದುಹಾಕು. ಆಗ
ನಿನ್ನ ಸಹೋದರನ ಕಣ್ಣಿನಲ್ಲಿರುವ ಅಣುವನ್ನು ತೆಗೆಯಲು ನಿನಗೆ
ಸ್ಪಷ್ಟವಾಗಿ ಕಾಣಿಸುವುದು.

## ಎರಡು ವಿಧವಾದ ಫಲ

(ಮತ್ತಾಯ 7:17-20; 12:34-35)

43 ‘‘ಒಳ್ಳೆಯ ಮರವು ಕೆಟ್ಟ ಫಲವನ್ನು ಕೊಡುವುದಿಲ್ಲ. ಅದೇ
ರೀತಿಯಲ್ಲಿ ಕೆಟ್ಟ ಮರವು ಒಳ್ಳೆಯ ಫಲವನ್ನು ಕೊಡುವುದಿಲ್ಲ.
44 ‘‘ಪ್ರತಿಯೊಂದು ಮರವನ್ನು ಅದರ ಫಲದಿಂದಲೇ
ಗುರುತಿಸಲಾಗುವುದು. ಜನರು ಮುಳ್ಳುಗಿಡಗಳಲ್ಲಿ ಅಂಜೂರದ
ಹಣ್ಣುಗಳನ್ನಾಗಲಿ ಪೊದೆಗಳಲ್ಲಿ ದ್ರಾಕ್ಷಿ ಹಣ್ಣುಗಳನ್ನಾಗಲಿ
ಪಡೆಯುವುದಿಲ್ಲ! 45 ಒಳ್ಳೆಯವನ ಹೃದಯದಲ್ಲಿ ಒಳ್ಳೆಯ
ದಿರುತ್ತವೆ. ಆದ್ದರಿಂದ ಅವನ ಹೃದಯದೊಳಗಿಂದ ಒಳ್ಳೆಯವು
ಹೊರಬರುತ್ತವೆ. ಆದರೆ ಕೆಟ್ಟವನ ಹೃದಯದಲ್ಲಿ ಕೆಟ್ಟವು
ಇರುತ್ತವೆ. ಆದ್ದರಿಂದ ಅವನ ಹೃದಯದೊಳಗಿಂದ ಕೆಟ್ಟವು
ಹೊರಬರುತ್ತವೆ. ಹೃದಯದಲ್ಲಿ ತುಂಬಿರುವುದೇ ಬಾಯಲ್ಲಿ
ಬರುವುದು.

## ಎರಡು ವಿಧವಾದ ಜನರು

(ಮತ್ತಾಯ 7:24-27)

46 ‘‘ನನ್ನನ್ನು ಸ್ವಾಮೀ, ಸ್ವಾಮೀ, ಎಂದು ಕರೆದು ನಾನು
ಹೇಳುವುದನ್ನು ನಡಿಸದೆ ಇರುವುದೇಕೆ? 47 ನನ್ನ ಬಳಿಗೆ ಬಂದು
ನನ್ನ ಮಾತುಗಳನ್ನು ಕೇಳಿ, ಅವುಗಳಿಗೆ ವಿಧೇಯನಾಗುವ
ಪ್ರತಿಯೊಬ್ಬನು ಮನೆಯನ್ನು ಕಟ್ಟುವ ವ್ಯಕ್ತಿಯಂತಿರುವನು.
48 ಅವನು ಆಳವಾದ ಅಸ್ತಿವಾರ ಹಾಕಿ, ಬಲವಾದ ಬಂಡೆಯ
ಮೇಲೆ ತನ್ನ ಮನೆಯನ್ನು ಕಟ್ಟುತ್ತಾನೆ. ಪ್ರವಾಹವು ಏರಿಬಂದು
ಆ ಮನೆಗೆ ಅಪ್ಪಳಿಸಿದರೂ ಆ ಮನೆಯನ್ನು ಕದಲಿಸಲಾರದು;
ಏಕೆಂದರೆ ಆ ಮನೆಯು ಬಲವಾಗಿ ಕಟ್ಟಲ್ಪಟ್ಟಿದೆ. 49 ಅದೇ
ರೀತಿಯಲ್ಲಿ, ನನ್ನ ಮಾತುಗಳನ್ನು ಕೇಳಿಯೂ ಅವುಗಳಿಗೆ
ವಿಧೇಯನಾಗದ ವ್ಯಕ್ತಿಯು ಅಸ್ತಿವಾರವಿಲ್ಲದೆ ನೆಲದ ಮೇಲೆ
ಮನೆ ಕಟ್ಟಿದ ಮನುಷ್ಯನಂತಿರುವನು. ಪ್ರವಾಹ ಬಂದಾಗ,
ಮನೆಯು ಬೇಗನೆ ಕುಸಿದು ಹೋಗಿ ಸಂಪೂರ್ಣವಾಗಿ
ನಾಶವಾಗುತ್ತದೆ.’’

## ಗುಣಹೊಂದಿದ ಸೇವಕ

(ಮತ್ತಾಯ 8:5-13; ಯೋಹಾನ 4:43-54)

7 ಯೇಸುವು ಜನರಿಗೆ ಈ ಸಂಗತಿಗಳೆಲ್ಲವನ್ನು ಹೇಳಿ
ಮುಗಿಸಿದ ನಂತರ ಕಪೆರ್ನೌಮಿಗೆ ಹೋದನು. 2 ಅಲ್ಲಿ
ಒಬ್ಬ ಸೇನಾಧಿಪತಿ* ಇದ್ದನು. ಅವನ ಪ್ರಿಯ ಸೇವಕನೊಬ್ಬನು
ಕಾಯಿಲೆಯಿಂದ ಸಾಯುವ ಸ್ಥಿತಿಯಲ್ಲಿದ್ದನು. 3 ಯೇಸುವಿನ
ಸುದ್ದಿಯನ್ನು ಕೇಳಿದಾಗ, ಅವನು ಕೆಲವು ಹಿರಿಯ ಯೆಹೂದ್ಯ
ನಾಯಕರನ್ನು ಆತನ ಬಳಿಗೆ ಕಳುಹಿಸಿ ತನ್ನ ಸೇವಕನ ಪ್ರಾಣವನ್ನು
ಉಳಿಸಿಕೊಡಬೇಕೆಂದು ಬೇಡಿಕೊಂಡನು. 4 ಆ ಜನರು ಯೇಸು
ವಿನ ಬಳಿಗೆ ಬಂದು, ‘‘ಈ ಸೇನಾಧಿಪತಿ ನಿನ್ನ ಸಹಾಯ ಹೊಂದು
ವುದಕ್ಕೆ ಯೋಗ್ಯನಾಗಿದ್ದಾನೆ. 5 ಅವನು ನಮ್ಮ ಜನರನ್ನು
ಪ್ರೀತಿಸುತ್ತಾನೆ ಮತ್ತು ನಮಗೋಸ್ಕರ ಸಭಾಮಂದಿರವನ್ನು

**ಕಪಟಿ** ಒಳ್ಳೆಯವನಂತೆ ನಟಿಸುವ ಕೆಟ್ಟವ್ಯಕ್ತಿ.

**ಸೇನಾಧಿಪತಿ** ನೂರು ಮಂದಿ ಸೈನಿಕರ ಮೇಲೆ ಅಧಿಕಾರವಿದ್ದ ರೋಮ್
ಸೈನ್ಯದ ಅಧಿಕಾರಿ.

ಕಟ್ಟಿಸಿಕೊಟ್ಟಿದ್ದಾನೆ'' ಎಂದು ಹೇಳಿ ಬಹಳವಾಗಿ ಬೇಡಿ
ಕೊಂಡರು.
6ಆದ್ದರಿಂದ ಯೇಸು ಅವರ ಜೊತೆ ಹೊರಟನು. ಯೇಸು
ಮನೆಯ ಹತ್ತಿರ ಬರುತ್ತಿರುವಾಗ ಆ ಅಧಿಕಾರಿಯು ಸ್ನೇಹಿತ
ರನ್ನು ಕಳುಹಿಸಿ, ''ಪ್ರಭುವೇ, ನೀನು ನನ್ನ ಮನೆಗೆ ಬರುವಷ್ಟು
ನಾನು ಯೋಗ್ಯನಲ್ಲ. 7ನಿನ್ನ ಬಳಿಗೆ ಬರುವುದಕ್ಕೂ ನನಗೆ
ಯೋಗ್ಯತೆ ಇಲ್ಲ. ನೀನು ಕೇವಲ ಒಂದು ಆಜ್ಞೆ ಕೊಟ್ಟರೆ ಸಾಕು,
ನನ್ನ ಆಳು ಗುಣಹೊಂದುವನು. 8ನಿನ್ನ ಅಧಿಕಾರವನ್ನು ನಾನು
ತಿಳಿದುಕೊಂಡಿದ್ದೇನೆ. ನಾನೂ ಮತ್ತೊಬ್ಬರ ಅಧೀನದಲ್ಲಿದ್ದೇನೆ.
ನನ್ನ ಅಧೀನದಲ್ಲಿಯೂ ಸೈನಿಕರಿದ್ದಾರೆ. ನಾನು ಒಬ್ಬ ಸೈನಿಕನಿಗೆ,
'ಹೋಗು' ಎಂದು ಹೇಳಿದರೆ, ಅವನು ಹೋಗುತ್ತಾನೆ. ಇನ್ನೊಬ್ಬ
ಸೈನಿಕನಿಗೆ, 'ಬಾ' ಎಂದು ಹೇಳಿದರೆ, ಅವನು ಬರುತ್ತಾನೆ. ನನ್ನ
ಆಳಿಗೆ, 'ಇದನ್ನು ಮಾಡು' ಎಂದು ಹೇಳಿದರೆ, ಅವನು ನನಗೆ
ವಿಧೇಯನಾಗುತ್ತಾನೆ'' ಎಂದು ಹೇಳಿ ಕಳುಹಿಸಿದನು.
9ಯೇಸು ಇದನ್ನು ಕೇಳಿ ಆಶ್ಚರ್ಯಪಟ್ಟು ತನ್ನನ್ನು
ಹಿಂಬಾಲಿಸುತ್ತಿದ್ದ ಜನರ ಕಡೆಗೆ ನೋಡಿ, ''ಇಷ್ಟು ದೊಡ್ಡ
ನಂಬಿಕೆಯಿರುವ ವ್ಯಕ್ತಿಯನ್ನು ನಾನು ಇಸ್ರೇಲಿನಲ್ಲಿಯೂ
ನೋಡಲಿಲ್ಲ ಎಂದು ನಿಮಗೆ ಹೇಳುತ್ತೇನೆ'' ಎಂದನು.
10ಆ ಅಧಿಕಾರಿಯು ಕಳುಹಿಸಿದ್ದ ಜನರು ಯೇಸುವಿನ
ಬಳಿಯಿಂದ ಹಿಂತಿರುಗಿ ಹೋದಾಗ, ಆ ಸೇವಕನಿಗೆ ಆಗಲೇ
ಗುಣವಾಗಿರುವುದನ್ನು ಕಂಡರು.

### ಸತ್ತವನಿಗೆ ಜೀವದಾನ

11ಮರುದಿನ ಯೇಸು ನಾಯಿನ್ ಎಂಬ ಊರಿಗೆ
ಹೋದನು. ಯೇಸುವಿನೊಡನೆ ಆತನ ಶಿಷ್ಯರೂ ಹೋಗು
ತ್ತಿದ್ದರು. ಅವರೊಡನೆ ಅನೇಕ ಜನರು ದೊಡ್ಡ ಸಮೂಹವಾಗಿ
ಹೋಗುತ್ತಿದ್ದರು. 12ಯೇಸು ಊರ ಬಾಗಲಿನ ಬಳಿಗೆ
ಬಂದಾಗ, ಸತ್ತುಹೋಗಿದ್ದ ಒಬ್ಬನನ್ನು ಸಮಾಧಿ ಮಾಡುವು
ದಕ್ಕಾಗಿ ಹೊತ್ತುಕೊಂಡು ಹೋಗುತ್ತಿದ್ದ ಜನರ ಗುಂಪನ್ನು
ಕಂಡನು. ವಿಧವೆಯೊಬ್ಬಳ ಒಬ್ಬನೇ ಮಗನು ಸತ್ತು
ಹೋಗಿದ್ದನು. ಅವನ ಶವವನ್ನು ಹೊತ್ತುಕೊಂಡು ಹೋಗು
ತ್ತಿದ್ದಾಗ ಊರಿನ ಅನೇಕ ಜನರು ಆಕೆಯೊಡನೆ ಇದ್ದರು.
13ಪ್ರಭುವು (ಯೇಸು) ಆಕೆಯನ್ನು ಕಂಡು, ತನ್ನ ಹೃದಯದಲ್ಲಿ
ಮರುಕಗೊಂಡು, ''ಅಳಬೇಡ'' ಎಂದು ಹೇಳಿ 14ಶವದ
ಪೆಟ್ಟಿಗೆಯ ಬಳಿ ಹೋಗಿ ಅದನ್ನು ಮುಟ್ಟಿದನು. ಆ ಪೆಟ್ಟಿಗೆಯನ್ನು
ಹೊತ್ತುಕೊಂಡು ಹೋಗುವವರು ನಿಂತುಕೊಂಡರು. ಯೇಸು
ಸತ್ತುಹೋಗಿದ್ದವನಿಗೆ, ''ಯೌವನಸ್ಥನೇ, ಎದ್ದೇಳು! ಎಂದು
ನಾನು ನಿನಗೆ ಹೇಳುತ್ತೇನೆ'' ಎಂದನು. 15ಆಗ ಅವನು ಎದ್ದು
ಕುಳಿತುಕೊಂಡು ಮಾತಾಡತೊಡಗಿದನು. ಯೇಸು ಅವನನ್ನು
ಅವನ ತಾಯಿಗೆ ಒಪ್ಪಿಸಿದನು.
16ಜನರೆಲ್ಲರೂ ವಿಸ್ಮಯಪಟ್ಟರು. ಅವರು ದೇವರನ್ನು
ಸ್ತುತಿಸುತ್ತಾ ''ಒಬ್ಬ ಮಹಾಪ್ರವಾದಿ ನಮ್ಮ ಬಳಿಗೆ ಬಂದಿದ್ದಾನೆ!
ದೇವರು ತನ್ನ ಜನರಿಗೆ ಸಹಾಯ ಮಾಡಲು ಬಂದಿದ್ದಾನೆ''
ಎಂದು ಹೇಳಿದರು. 17ಯೇಸುವಿನ ಕುರಿತಾದ ಈ ಸುದ್ದಿಯು
ಜುದೇಯದಲ್ಲಿಯೂ ಅದರ ಸುತ್ತಮುತ್ತಲಿನ ಎಲ್ಲಾ
ಸ್ಥಳಗಳಲ್ಲಿಯೂ ಹಬ್ಬಿಕೊಂಡಿತು.

### ಯೋಹಾನನು ಯೇಸುವಿಗೆ ಕೇಳಿದ ಪ್ರಶ್ನೆ

(ಮತ್ತಾಯ 11:2-19)

18ಯೋಹಾನನ ಶಿಷ್ಯರು ಈ ಸಂಗತಿಗಳನ್ನೆಲ್ಲಾ ಯೋಹಾನ
ನಿಗೆ ತಿಳಿಸಿದರು. ಯೋಹಾನನು ತನ್ನ ಶಿಷ್ಯರಲ್ಲಿ ಇಬ್ಬರನ್ನು
ಕರೆದು, 19ಬರಬೇಕಾದವನು ನೀನೋ ಅಥವಾ ಬೇರೊಬ್ಬ
ವ್ಯಕ್ತಿಗಾಗಿ ನಾವು ಕಾಯಬೇಕೋ?'' ಎಂದು ಕೇಳುವುದಕ್ಕಾಗಿ
ಅವರನ್ನು ಪ್ರಭುವಿನ (ಯೇಸುವಿನ) ಬಳಿಗೆ ಕಳುಹಿಸಿದನು.
20ಆದ್ದರಿಂದ ಅವರು ಯೇಸುವಿನ ಬಳಿಗೆ ಬಂದು, ''ಸ್ನಾನಿಕ
ಯೋಹಾನನು 'ಬರಬೇಕಾದವನು ನೀನೋ ಅಥವಾ
ಬೇರೊಬ್ಬ ವ್ಯಕ್ತಿಗಾಗಿ ನಾವು ಕಾಯಬೇಕೋ?' ಎಂದು
ನಿನ್ನನ್ನು ಕೇಳುವುದಕ್ಕಾಗಿ ನಮ್ಮನ್ನು ಇಲ್ಲಿಗೆ ಕಳುಹಿಸಿದ್ದಾನೆ''
ಎಂದು ಹೇಳಿದರು.
21ಅದೇ ಸಮಯದಲ್ಲಿ, ಯೇಸು ಅನೇಕ ಜನರನ್ನು
ಅವರವರ ಕಾಯಿಲೆಗಳಿಂದ, ರೋಗಗಳಿಂದ ಗುಣಪಡಿಸಿದನು.
ದೆವ್ವಗಳಿಂದ ಪೀಡಿತರಾಗಿದ್ದವರನ್ನು ಬಿಡಿಸಿದನು. ಅನೇಕ
ಕುರುಡರಿಗೆ ದೃಷ್ಟಿಯನ್ನು ಕೊಟ್ಟನು. 22ಬಳಿಕ ಯೇಸು
ಯೋಹಾನನ ಶಿಷ್ಯರಿಗೆ, ''ನೀವು ಇಲ್ಲಿ ಕಂಡು ಕೇಳಿದ
ಸಂಗತಿಗಳನ್ನು ಹೋಗಿ ಯೋಹಾನನಿಗೆ ತಿಳಿಸಿರಿ. ಕುರುಡರಿಗೆ
ದೃಷ್ಟಿ ಬರುತ್ತದೆ, ಕುಂಟರು ಕಾಲನ್ನು ಪಡೆದು ನಡೆಯುತ್ತಾರೆ.
ಕುಷ್ಠರೋಗಿಗಳು ಗುಣಹೊಂದುತ್ತಾರೆ. ಕಿವುಡರು ಕೇಳುತ್ತಾರೆ,
ಸತ್ತವರಿಗೆ ಜೀವ ಬರುತ್ತದೆ, ಮತ್ತು ದೇವರ ರಾಜ್ಯದ
ಸುವಾರ್ತೆಯು ಬಡವರಿಗೆ ಕೊಡಲ್ಪಡುತ್ತದೆ. 23ಸಂಶಯಪಡದೆ
ನನ್ನನ್ನು ಸ್ವೀಕರಿಸಿಕೊಳ್ಳುವವನೇ ಧನ್ಯನು!'' ಎಂದು ಹೇಳಿ
ಕಳುಹಿಸಿದನು.
24ಯೋಹಾನನ ಶಿಷ್ಯರು ಹೊರಟುಹೋದಾಗ, ಯೇಸು
ಜನರಿಗೆ ಯೋಹಾನನ ಕುರಿತು ಹೇಳತೊಡಗಿ, ''ಏನನ್ನು
ನೋಡುವುದಕ್ಕೆ ನೀವು ಮರಳುಗಾಡಿಗೆ ಹೋಗಿದ್ದಿರಿ?
ಗಾಳಿಯಿಂದ ಅಲ್ಲಾಡುವ ದಂಟನ್ನೋ? 25ನೀವು ಏನನ್ನು
ನೋಡಲು ಹೊರಗೆ ಹೋದಿರಿ? ನಯವಾದ ಉಡುಪನ್ನು
ಧರಿಸುವ ಮನುಷ್ಯನನ್ನೋ? ಇಲ್ಲ, ನಯವಾದ ಮತ್ತು
ಚಂದವಾದ ಉಡುಪನ್ನು ಧರಿಸಿದವರು ಅರಮನೆಗಳಲ್ಲಿ ವಾಸ
ಮಾಡುತ್ತಾರೆ. 26ನಿಜವಾಗಿಯೂ, ನೀವು ಏನನ್ನು ನೋಡಲು
ಹೊರಗೆ ಹೋದಿರಿ? ಪ್ರವಾದಿಯನ್ನೋ? ಹೌದು. ನಾನು
ನಿಮಗೆ ಹೇಳುವುದೇನಂದರೆ, ಯೋಹಾನನು ಪ್ರವಾದಿ
ಗಿಂತಲೂ ಶ್ರೇಷ್ಠನಾಗಿದ್ದಾನೆ.

> 27 'ಇಗೋ! ನಾನು (ದೇವರು) ನನ್ನ ದೂತನನ್ನು*
> ನಿನ್ನ ಮುಂದೆ ಕಳುಹಿಸುತ್ತೇನೆ. ಅವನು ನಿನ
> ಗೋಸ್ಕರ ದಾರಿಯನ್ನು ಸಿದ್ಧಮಾಡುವನು'
> *ಮಲಾಕಿ 3:1*

ಎಂದು ಯೋಹಾನನ ಕುರಿತು ಬರೆದಿದೆ.
28ಈ ಲೋಕದಲ್ಲಿ ಹುಟ್ಟಿದ ಎಲ್ಲಾ ಮನುಷ್ಯರಲ್ಲಿ
ಯೋಹಾನನೇ ದೊಡ್ಡವನು ಎಂದು ನಾನು ನಿಮಗೆ ಹೇಳು
ತ್ತೇನೆ. ಆದರೂ ದೇವರ ರಾಜ್ಯದಲ್ಲಿರುವ ಕನಿಷ್ಠನು ಸಹ
ಅವನಿಗಿಂತ ಶ್ರೇಷ್ಠನೇ ಸರಿ'' ಎಂದನು.

---

**ದೂತನನ್ನು** ಅಕ್ಷರಶಃ ಸಂದೇಶಕನನ್ನು.

29‘‘ಯೋಹಾನನು ಉಪದೇಶಿಸಿದ ದೇವರ ವಾಕ್ಯವನ್ನು
ಜನರೆಲ್ಲರೂ ಸ್ವೀಕರಿಸಿಕೊಂಡರು. ಸುಂಕ ವಸೂಲಿಗಾರರೂ
ಸ್ವೀಕರಿಸಿಕೊಂಡರು. ಇವರೆಲ್ಲರೂ ಯೋಹಾನನಿಂದ ದೀಕ್ಷಾ
ಸ್ನಾನ ಮಾಡಿಸಿಕೊಂಡರು. 30ಆದರೆ ಫರಿಸಾಯರು* ಮತ್ತು
ಧರ್ಮೋಪದೇಶಕರು ದೇವರ ಯೋಜನೆಯನ್ನು ತಿರಸ್ಕರಿಸಿ
ಯೋಹಾನನಿಂದ ದೀಕ್ಷಾಸ್ನಾನ ಮಾಡಿಸಿಕೊಳ್ಳಲಿಲ್ಲ.
31ಈ ಕಾಲದ ಜನರ ಬಗ್ಗೆ ನಾನು ಏನು ಹೇಳಲಿ? ನಾನು
ಅವರನ್ನು ಯಾವುದಕ್ಕೆ ಹೋಲಿಸಲಿ? ಅವರು ಯಾರನ್ನು
ಹೋಲುತ್ತಾರೆ? 32ಈ ಕಾಲದ ಜನರು ಮಾರುಕಟ್ಟೆಯಲ್ಲಿ
ಕುಳಿತುಕೊಂಡಿರುವ ಮಕ್ಕಳಿಗೆ ಹೋಲುತ್ತಾರೆ. ಒಂದು
ಗುಂಪಿನ ಮಕ್ಕಳು ಇನ್ನೊಂದು ಗುಂಪಿನ ಮಕ್ಕಳನ್ನು ಕರೆದು,

‘ನಾವು ನಿಮಗೋಸ್ಕರ ವಾದ್ಯಬಾರಿಸಿದೆವು, ಆದರೆ
ನೀವು ಕುಣಿಯಲಿಲ್ಲ. ನಾವು ದುಃಖದ ಹಾಡನ್ನು
ಹಾಡಿದೆವು, ಆದರೆ ನೀವು ಅಳಲಿಲ್ಲ.
ಎಂದು ಹೇಳುತ್ತಾರೆ.

33ಸ್ನಾನಿಕ ಯೋಹಾನನು ಬಂದನು. ಅವನು ಇತರರಂತೆ
ತಿನ್ನಲಿಲ್ಲ. ಅಥವಾ ದ್ರಾಕ್ಷಾರಸವನ್ನು ಕುಡಿಯಲಿಲ್ಲ. ಆದರೆ
ನೀವು, ‘ಅವನಿಗೆ ದೆವ್ವ ಹಿಡಿದಿದೆ’ ಎಂದು ಹೇಳುತ್ತೀರಿ.
34ಮನುಷ್ಯಕುಮಾರನು ಬಂದನು. ಅವನು ಇತರ ಜನರಂತೆ
ಊಟ ಮಾಡುತ್ತಾನೆ ಮತ್ತು ದ್ರಾಕ್ಷಾರಸವನ್ನು ಕುಡಿಯುತ್ತಾನೆ.
ಆದರೆ ನೀವು, ‘ನೋಡಿರಿ! ಅವನೊಬ್ಬ ಹೊಟ್ಟೆಬಾಕ, ಕುಡುಕ!
ಸುಂಕ ವಸೂಲಿಗಾರರು ಮತ್ತು ಇತರ ಕೆಟ್ಟ ಜನರೇ ಅವನ
ಸ್ನೇಹಿತರು!’ ಎನ್ನುತ್ತೀರಿ. 35ಆದರೆ ಜ್ಞಾನವು ತನ್ನ ಕಾರ್ಯ
ಗಳಿಂದಲೇ ತನ್ನನ್ನು ಸಮರ್ಥಿಸಿಕೊಳ್ಳುವುದು’’ ಎಂದು
ಹೇಳಿದನು.

### ಫರಿಸಾಯನಾದ ಸಿಮೋನನು

36ಫರಿಸಾಯರಲ್ಲಿ ಒಬ್ಬನು ಯೇಸುವನ್ನು ಊಟಕ್ಕೆ
ಬರಬೇಕೆಂದು ಕೇಳಿಕೊಂಡನು. ಆದ್ದರಿಂದ ಯೇಸು ಅವನ
ಮನೆಗೆ ಹೋಗಿ ಊಟಕ್ಕೆ ಕುಳಿತುಕೊಂಡನು. 37ಆ ಊರಿನಲ್ಲಿ
ಪಾಪಿಷ್ಠಳಾದ ಒಬ್ಬ ಸ್ತ್ರೀ ಇದ್ದಳು. ಯೇಸುವು ಫರಿಸಾಯನ
ಮನೆಯಲ್ಲಿ ಊಟಮಾಡುತ್ತಿದ್ದಾನೆಂದು ಆಕೆಗೆ ತಿಳಿಯಿತು.
ಆದ್ದರಿಂದ ಆಕೆ ಭರಣಿಯಲ್ಲಿ* ಸ್ವಲ್ಪ ಪರಿಮಳ ತೈಲವನ್ನು
ತೆಗೆದುಕೊಂಡು ಬಂದಳು. 38ಆಕೆ ಯೇಸುವಿನ ಪಾದಗಳ ಬಳಿ
ಅಳುತ್ತಾ, ತನ್ನ ಕಣ್ಣೀರಿನಿಂದ ಆತನ ಪಾದಗಳನ್ನು ತೇವಮಾಡಿ
ತನ್ನ ತಲೆಯ ಕೂದಲಿನಿಂದ ಯೇಸುವಿನ ಪಾದಗಳನ್ನು
ಒರಸಿದಳು. ಆಕೆ ಅನೇಕ ಸಲ ಆತನ ಪಾದಗಳಿಗೆ ಮುದ್ದಿಟ್ಟು
ಪರಿಮಳ ತೈಲವನ್ನು ಹಚ್ಚಿದಳು. 39ಯೇಸುವನ್ನು ತನ್ನ ಮನೆಗೆ
ಊಟಕ್ಕೆ ಕರೆದಿದ್ದ ಫರಿಸಾಯನು ಇದನ್ನು ಕಂಡು ತನ್ನೊಳಗೆ,
‘‘ಯೇಸು ಪ್ರವಾದಿಯೇ ಆಗಿದ್ದರೆ, ತನ್ನನ್ನು ಮುಟ್ಟುತ್ತಿರುವ
ಸ್ತ್ರೀಯು ಪಾಪಿಷ್ಠಳೆಂದು ತಿಳಿದುಕೊಳ್ಳುತ್ತಿದ್ದನು’’ ಎಂದು
ಕೊಂಡನು.
40ಅದಕ್ಕೆ ಯೇಸು ಫರಿಸಾಯನಿಗೆ, ‘‘ಸಿಮೋನನೇ, ನಾನು
ನಿನಗೆ ಒಂದು ವಿಷಯವನ್ನು ಹೇಳಬೇಕಾಗಿದೆ’’ ಎಂದನು.

ಸಿಮೋನನು, ‘‘ಗುರುವೇ, ಹೇಳು!’’ ಅಂದನು.

41ಯೇಸು, ‘‘ಇಬ್ಬರು ಮನುಷ್ಯರಿದ್ದರು. ಅವರಿಬ್ಬರೂ
ಒಬ್ಬನೇ ಸಾಹುಕಾರನಿಂದ ಹಣವನ್ನು ಬಡ್ಡಿಗೆ ತೆಗೆದು
ಕೊಂಡಿದ್ದರು. ಒಬ್ಬನು ಐನೂರು ಬೆಳ್ಳಿ ನಾಣ್ಯಗಳನ್ನು* ತೆಗೆದು
ಕೊಂಡಿದ್ದನು. ಇನ್ನೊಬ್ಬನು ಐವತ್ತು ಬೆಳ್ಳಿ ನಾಣ್ಯಗಳನ್ನು ತೆಗೆದು
ಕೊಂಡಿದ್ದನು. 42ಅವರಲ್ಲಿ ಹಣವಿರಲಿಲ್ಲ. ಆದ್ದರಿಂದ ಅವರು
ಸಾಲ ತೀರಿಸಲು ಆಗಲಿಲ್ಲ. ಸಾಹುಕಾರನು ಅವರಿಗೆ, ‘ನೀವು
ಸಾಲ ತೀರಿಸಬೇಕಾಗಿಲ್ಲ’ ಎಂದು ಹೇಳಿದನು. ಆ ಇಬ್ಬರಲ್ಲಿ
ಯಾರು ಹೆಚ್ಚಾಗಿ ಸಾಹುಕಾರನನ್ನು ಪ್ರೀತಿಸುವರು?’’ ಎಂದು
ಕೇಳಿದನು.
43ಸಿಮೋನನು, ‘‘ಹೆಚ್ಚು ಸಾಲ ತೆಗೆದುಕೊಂಡಿದ್ದವನೇ
ಎಂದು ತೋರುತ್ತದೆ’’ ಎಂದನು.

ಯೇಸು ಸಿಮೋನನಿಗೆ, ‘‘ನೀನು ಸರಿಯಾಗಿ ಹೇಳಿದೆ’’
ಎಂದನು. 44ಬಳಿಕ ಯೇಸು ಸ್ತ್ರೀಯ ಕಡೆಗೆ ನೋಡಿ
ಸಿಮೋನನಿಗೆ, ‘‘ಈ ಸ್ತ್ರೀಯು ನಿನಗೆ ಕಾಣುತ್ತಿರುವಳೇ? ನಾನು
ನಿನ್ನ ಮನೆಯೊಳಗೆ ಬಂದಾಗ ನೀನು ನನ್ನ ಪಾದಗಳಿಗೆ ನೀರು
ಕೊಡಲಿಲ್ಲ. ಆದರೆ ಈಕೆ ತನ್ನ ಕಣ್ಣೀರಿನಿಂದ ನನ್ನ ಪಾದಗಳನ್ನು
ತೇವಮಾಡಿ ತನ್ನ ತಲೆಯ ಕೂದಲಿಂದ ಒರಸಿದಳು. 45ನೀನು
ನನಗೆ ಮುದ್ದಿಡಲಿಲ್ಲ. ಈಕೆಯಾದರೋ ನಾನು ಒಳಗೆ
ಬಂದಾಗಿನಿಂದ ನನ್ನ ಪಾದಗಳಿಗೆ ಮುದ್ದಿಡುತ್ತಿದ್ದಾಳೆ! 46ನೀನು
ನನ್ನ ತಲೆಗೆ ಎಣ್ಣೆಯನ್ನು ಹಚ್ಚಲಿಲ್ಲ. ಈಕೆಯಾದರೋ ನನ್ನ
ಪಾದಗಳಿಗೆ ಪರಿಮಳ ತೈಲವನ್ನು ಹಚ್ಚಿದಳು. 47ಈಕೆಯ ಅನೇಕ
ಪಾಪಗಳು ಕ್ಷಮಿಸಲ್ಪಟ್ಟಿವೆ ಎಂದು ನಾನು ನಿನಗೆ ಹೇಳುತ್ತೇನೆ.
ಏಕೆಂದರೆ ಈಕೆ ಅಧಿಕವಾದ ಪ್ರೀತಿಯನ್ನು ತೋರಿದಳು. ಆದರೆ
ಸ್ವಲ್ಪ ಕ್ಷಮೆ ಹೊಂದುವವನು ಕೇವಲ ಸ್ವಲ್ಪ ಪ್ರೀತಿಯನ್ನೇ
ತೋರುವನು’’ ಎಂದು ಹೇಳಿದನು.
48ಬಳಿಕ ಯೇಸು ಆಕೆಗೆ, ‘‘ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ’’
ಎಂದು ಹೇಳಿದನು.
49ಊಟಕ್ಕೆ ಕುಳಿತುಕೊಂಡಿದ್ದವರು, ‘‘ಇವನು (ಯೇಸು)
ತನ್ನನ್ನು ಯಾರೆಂದುಕೊಂಡಿದ್ದಾನೆ? ಪಾಪಗಳನ್ನು ಕ್ಷಮಿಸಲು
ಇವನಿಗೆ ಹೇಗೆ ಸಾಧ್ಯ?’’ ಎಂದು ತಮ್ಮೊಳಗೆ ಅಂದುಕೊಂಡರು.
50ಯೇಸು ಆ ಸ್ತ್ರೀಗೆ, ‘‘ನಿನ್ನ ನಂಬಿಕೆಯಿಂದಲೇ ನಿನಗೆ
ರಕ್ಷಣೆ ಆಯಿತು. ಸಮಾಧಾನದಿಂದ ಹೋಗು’’ ಎಂದು
ಹೇಳಿದನು.

### ಯೇಸುವಿನೊಂದಿಗಿದ್ದ ಜನರು

8 ಮರುದಿನ, ಯೇಸು ಕೆಲವು ನಗರಗಳ ಮತ್ತು ಊರುಗಳ
ಮೂಲಕ ಪ್ರಯಾಣ ಮಾಡಿ ಜನರಿಗೆ ಬೋಧಿಸಿದನು
ಮತ್ತು ದೇವರ ರಾಜ್ಯದ ಸುವಾರ್ತೆಯನ್ನು ತಿಳಿಸಿದನು.

---

**ಫರಿಸಾಯರು** ಯೆಹೂದ್ಯ ಕಟ್ಟಳೆಗಳನ್ನು ಮತ್ತು ಪದ್ಧತಿಗಳನ್ನು ಶ್ರದ್ಧೆಯಿಂದ ಅನುಸರಿಸುವವರು ಎಂದು ಹೇಳಿಕೊಳ್ಳುವ ಯೆಹೂದ್ಯರ ಧಾರ್ಮಿಕ ಗುಂಪಿಗೆ ಸೇರಿದವರು.

**ಭರಣಿ** ಮೂಲ: ಚಂದ್ರಕಾಂತ ಶಿಲೆಯ ಭರಣಿ.

**ಬೆಳ್ಳಿ ನಾಣ್ಯಗಳು** ಒಂದು ನಾಣ್ಯ ಅಂದರೆ ರೋಮನ್ನರ ಒಂದು ‘ದೆನರಿಯಸ್.’ ಒಂದು ದಿನದ ಕೆಲಸಕ್ಕೆ ದೊರಕುವ ಸರಾಸರಿ ಸಂಬಳ ಇದಾಗಿತ್ತು.

ಹನ್ನೆರಡು ಮಂದಿ ಅಪೊಸ್ತಲರು ಆತನೊಡನೆ ಇದ್ದರು. 2ಕೆಲವು
ಸ್ತ್ರೀಯರೂ ಆತನೊಡನೆ ಇದ್ದರು. ಈ ಸ್ತ್ರೀಯರು ಆತನಿಂದ
ತಮ್ಮ ಕಾಯಿಲೆಗಳಿಂದ ಗುಣಹೊಂದಿದವರೂ ದೆವ್ವಗಳ
ಕಾಟದಿಂದ ಬಿಡುಗಡೆ ಹೊಂದಿದವರೂ ಆಗಿದ್ದರು. ಈ
ಸ್ತ್ರೀಯರಲ್ಲಿ ಒಬ್ಬಳ ಹೆಸರು ಮರಿಯಳು. ಆಕೆ ಮಗ್ದಲ ಎಂಬ
ಊರಿನವಳು. ಯೇಸು ಆಕೆಯನ್ನು ಏಳು ದೆವ್ವಗಳಿಂದ
ಬಿಡಿಸಿದ್ದನು.
3ಇದಲ್ಲದೆ ಕೂಜನ (ಹೆರೋದನ ಸಹಾಯಕ)
ಹೆಂಡತಿಯಾದ ಯೋಹಾನಳು, ಸುಸನ್ನಳು ಮತ್ತು ಬೇರೆ ಅನೇಕ
ಸ್ತ್ರೀಯರು ಇದ್ದರು. ಈ ಸ್ತ್ರೀಯರು ಯೇಸುವಿಗೂ ಆತನ
ಅಪೊಸ್ತಲರಿಗೂ ತಮ್ಮ ಸ್ವಂತ ಹಣದಿಂದ ಸಹಾಯ
ಮಾಡುತ್ತಿದ್ದರು.

### ಯೇಸು ಹೇಳಿದ ಬೀಜ ಬಿತ್ತುವವನ ಸಾಮ್ಯ
(ಮತ್ತಾಯ 13:1-17; ಮಾರ್ಕ 4:1-12)

4ಅನೇಕ ಜನರು ಊರೂರುಗಳಿಂದ ಯೇಸುವಿನ ಬಳಿಗೆ
ಸೇರಿಬಂದರು. ಆಗ ಯೇಸು ಅವರಿಗೆ ಈ ಸಾಮ್ಯ ಹೇಳಿದನು:
5“ಒಬ್ಬ ರೈತನು ಬೀಜ ಬಿತ್ತುವುದಕ್ಕೆ ಹೊಲಕ್ಕೆ ಹೋದನು.
ಬೀಜ ಬಿತ್ತುವಾಗ ಕೆಲವು ಬೀಜಗಳು ಕಾಲ್ದಾರಿಯಲ್ಲಿ ಬಿದ್ದು
ಜನರ ತುಳಿತಕ್ಕೆ ಸಿಕ್ಕಿಕೊಂಡವು. ಹಕ್ಕಿಗಳು ಬಂದು ಅವುಗಳನ್ನೆಲ್ಲ
ತಿಂದುಬಿಟ್ಟವು. 6ಕೆಲವು ಬೀಜ ಬಂಡೆಯ ಮೇಲೆ ಬಿದ್ದವು.
ಅವುಗಳು ಮೊಳೆಯತೊಡಗಿದರೂ ನೀರಿಲ್ಲದೆ ಒಣಗಿ
ಹೋದವು. 7ಕೆಲವು ಬೀಜಗಳು ಮುಳ್ಳುಗಿಡಗಳ ಮಧ್ಯೆ ಬಿದ್ದವು.
ಅವುಗಳು ಮೊಳೆತರೂ ಮುಳ್ಳುಗಿಡಗಳಿಂದ ಬೆಳೆಯಲಾಗಲಿಲ್ಲ.
8ಕೆಲವು ಬೀಜಗಳು ಒಳ್ಳೆಯ ನೆಲದಲ್ಲಿ ಬಿದ್ದವು. ಈ ಬೀಜಗಳು
ಮೊಳೆತು ಬೆಳೆದು ನೂರರಷ್ಟು ಹೆಚ್ಚು ಫಲವನ್ನು ಕೊಟ್ಟವು.”
ಯೇಸು ಈ ಸಾಮ್ಯವನ್ನು ಹೇಳಿ ಮುಗಿಸಿದ ಮೇಲೆ, “ನನ್ನ
ಮಾತನ್ನು ಆಲಿಸುತ್ತಿರುವ ಜನರೇ, ಕೇಳಿರಿ” ಎಂದು ಹೇಳಿದನು.
9ಶಿಷ್ಯರು ಆತನಿಗೆ, “ಈ ಸಾಮ್ಯದ ಅರ್ಥವೇನು?” ಎಂದು
ಕೇಳಿದರು.
10ಯೇಸು, “ನೀವು ದೇವರರಾಜ್ಯದ ಗುಟ್ಟುಗಳನ್ನು
ತಿಳಿದುಕೊಳ್ಳಬೇಕೆಂದು ನಿಮ್ಮನ್ನು ಆರಿಸಿಕೊಳ್ಳಲಾಗಿದೆ. ಆದರೆ
ಬೇರೆ ಜನರೊಂದಿಗೆ ನಾನು ಸಾಮ್ಯಗಳ ಮೂಲಕ
ಮಾತಾಡುತ್ತೇನೆ. ಏಕೆಂದರೆ,

> ‘ಅವರು ನೋಡಿದರೂ ಕಾಣುವುದಿಲ್ಲ, ಕೇಳಿ
> ದರೂ ಗ್ರಹಿಸಿಕೊಳ್ಳುವುದಿಲ್ಲ.’
>
> *ಯೆಶಾಯ 6:9*

### ಬೀಜಗಳ ಕುರಿತು ಯೇಸು ಕೊಟ್ಟ ವಿವರಣೆ
(ಮತ್ತಾಯ 13:18-23; ಮಾರ್ಕ 4:13-20)

11“ಈ ಸಾಮ್ಯದ ಅರ್ಥ ಹೀಗಿದೆ: ಬೀಜವು ದೇವರ ವಾಕ್ಯ.
12ಕಾಲ್ದಾರಿಯಲ್ಲಿ ಬಿದ್ದ ಬೀಜವೆಂದರೇನು? ದೇವರ ವಾಕ್ಯ
ವನ್ನು ಕೆಲವರು ಕೇಳುತ್ತಾರೆ, ಆದರೆ ಸೈತಾನನು ಬಂದು ಅವರ
ಹೃದಯದೊಳಗಿಂದ ಆ ವಾಕ್ಯವನ್ನು ತೆಗೆದು ಬಿಡುತ್ತಾನೆ. ಅವರು
ಆ ವಾಕ್ಯವನ್ನು ನಂಬದಿರುವುದರಿಂದ ರಕ್ಷಣೆಯನ್ನು ಹೊಂದ
ಲಾರರು. 13ಬಂಡೆಯ ಮೇಲೆ ಬಿದ್ದ ಬೀಜವೆಂದರೇನು?
ಕೆಲವರು ದೇವರ ವಾಕ್ಯ ಕೇಳಿ ಸಂತೋಷದಿಂದ ಸ್ವೀಕರಿಸಿ
ಕೊಳ್ಳುತ್ತಾರೆ. ಆದರೆ ಅವರಿಗೆ ಆಳವಾದ ಬೇರುಗಳಿರುವುದಿಲ್ಲ.
ಅವರು ಸ್ವಲ್ಪಕಾಲ ಮಾತ್ರವೇ ನಂಬುತ್ತಾರೆ. ಬಳಿಕ
ತೊಂದರೆಯೇನಾದರೂ ಬಂದರೆ ತಮ್ಮ ನಂಬಿಕೆಯನ್ನು
ಕಳೆದುಕೊಂಡು ದೇವರಿಂದ ದೂರ ಸರಿಯುತ್ತಾರೆ. 14ಮುಳ್ಳು
ಗಿಡಗಳ ಮಧ್ಯದಲ್ಲಿ ಬಿದ್ದ ಬೀಜವೆಂದರೇನು? ಕೆಲವರು
ದೇವರ ವಾಕ್ಯವನ್ನು ಕೇಳುತ್ತಾರೆ. ಆದರೆ ತಾವು ಬೆಳೆಯ
ಲಾಗದಂತೆ ಈ ಲೋಕದ ಚಿಂತೆಗಳಿಗೂ ಐಶ್ವರ್ಯಗಳಿಗೂ
ಮತ್ತು ಭೋಗಗಳಿಗೂ ಅವಕಾಶಕೊಡುತ್ತಾರೆ. ಆದುದರಿಂದ
ಅವರು ಎಂದಿಗೂ ಒಳ್ಳೆಯ ಫಲವನ್ನು ಕೊಡುವುದಿಲ್ಲ.
15ಒಳ್ಳೆಯ ನೆಲದಲ್ಲಿ ಬಿದ್ದ ಬೀಜವೆಂದರೇನು? ಒಳ್ಳೆಯದಾದ
ಮತ್ತು ಯಥಾರ್ಥವಾದ ಹೃದಯದಿಂದ ದೇವರ ವಾಕ್ಯವನ್ನು
ಕೇಳುವ ಜನರೇ ಬೀಜಬಿದ್ದ ಒಳ್ಳೆಯ ನೆಲವಾಗಿದ್ದಾರೆ. ಅವರು
ದೇವರ ವಾಕ್ಯಕ್ಕೆ ವಿಧೇಯರಾಗಿ ತಾಳ್ಮೆಯಿಂದ ಒಳ್ಳೆಯ
ಫಲವನ್ನು ನೀಡುವರು.

### ನಿಮ್ಮ ತಿಳುವಳಿಕೆಯನ್ನು ಉಪಯೋಗಿಸಿರಿ
(ಮಾರ್ಕ 4:21-25)

16“ಯಾವ ವ್ಯಕ್ತಿಯೂ ದೀಪವನ್ನು ಹಚ್ಚಿ ಅದನ್ನು ಪಾತ್ರೆಯ
ಒಳಗಾಗಲಿ ಮಂಚದ ಕೆಳಗಾಗಲಿ ಬಚ್ಚಿಡುವುದಿಲ್ಲ.
ಮನೆಯೊಳಗೆ ಬರುವವರಿಗೆ ಸಾಕಷ್ಟು ಬೆಳಕು ದೊರೆಯಲಿ
ಎಂದು ದೀಪವನ್ನು ದೀಪಸ್ತಂಭದ ಮೇಲೆ ಇಡುತ್ತಾನೆ.
17ಬೆಳಕಿಗೆ ಬಾರದ ಯಾವ ರಹಸ್ಯವೂ ಇಲ್ಲ; ಬಯಲಿಗೆ ಬಾರದ
ಯಾವ ಗುಟ್ಟೂ ಇಲ್ಲ. 18ಆದುದರಿಂದ ನೀವು ಕಿವಿಗೊಡುವಾಗ
ಜಾಗರೂಕರಾಗಿರಿ; ಸ್ವಲ್ಪ ತಿಳುವಳಿಕೆ ಇರುವ ವ್ಯಕ್ತಿಯು ಹೆಚ್ಚು
ತಿಳುವಳಿಕೆಯನ್ನು ಹೊಂದುವನು. ಆದರೆ ತಿಳುವಳಿಕೆ ಇಲ್ಲದ
ವ್ಯಕ್ತಿಯು ತನಗಿದೆ ಎಂದುಕೊಂಡಿದ್ದ ತಿಳುವಳಿಕೆಯನ್ನೂ
ಕಳೆದುಕೊಳ್ಳುವನು.”

### ಯೇಸುವಿನ ಶಿಷ್ಯರೇ ಆತನ ಕುಟುಂಬದವರು
(ಮತ್ತಾಯ 12:46-50; ಮಾರ್ಕ 3:31-35)

19ಯೇಸುವಿನ ತಾಯಿ ಮತ್ತು ತಮ್ಮಂದಿರು ಆತನನ್ನು
ಭೇಟಿಯಾಗಲು ಬಂದರು. ಅಲ್ಲಿ ಬಹಳ ಜನರು ಇದ್ದುದರಿಂದ
ಯೇಸುವಿನ ತಾಯಿಯಾಗಲಿ ಆತನ ತಮ್ಮಂದಿರಾಗಲಿ ಆತನ
ಬಳಿಗೆ ಹೋಗಲು ಸಾಧ್ಯವಾಗಲಿಲ್ಲ. ಅಲ್ಲಿದ್ದ ಒಬ್ಬನು, 20“ನಿನ್ನ
ತಾಯಿ ಮತ್ತು ನಿನ್ನ ತಮ್ಮಂದಿರು ಹೊರಗೆ ನಿಂತಿದ್ದಾರೆ. ಅವರು
ನಿನ್ನನ್ನು ನೋಡಬೇಕೆಂದಿದ್ದಾರೆ” ಎಂದು ಯೇಸುವಿಗೆ
ತಿಳಿಸಿದನು.
21ಅದಕ್ಕೆ ಯೇಸು, “ದೇವರ ವಾಕ್ಯವನ್ನು ಕೇಳಿ ಅದಕ್ಕೆ
ವಿಧೇಯರಾಗುವ ಜನರೇ ನನ್ನ ತಾಯಿ ಮತ್ತು ನನ್ನ
ತಮ್ಮಂದಿರು!” ಎಂದು ಉತ್ತರ ಕೊಟ್ಟನು.

### ಯೇಸುವಿನ ಶಕ್ತಿಯನ್ನು ಶಿಷ್ಯರು ಕಂಡರು
(ಮತ್ತಾಯ 8:23-27; ಮಾರ್ಕ 4:35-41)

22ಒಂದು ದಿನ ಯೇಸು ಮತ್ತು ಆತನ ಶಿಷ್ಯರು ದೋಣಿ
ಯಲ್ಲಿ ಹತ್ತಿ ಕುಳಿತುಕೊಂಡರು. ಯೇಸು ಅವರಿಗೆ, “ನಾವು

ಸರೋವರದ ಆಚೆದಡಕ್ಕೆ ಹೋಗೋಣ’’ ಎಂದು ಹೇಳಿದನು.
ಅಂತೆಯೇ ಅವರು ಆಚೆದಡಕ್ಕೆ ಹೊರಟರು. 23ಅವರು
ಸರೋವರದ ಮೇಲೆ ದೋಣಿಯಲ್ಲಿ ಹೋಗುತ್ತಿರುವಾಗ
ಯೇಸುವಿಗೆ ನಿದ್ದೆ ಹತ್ತಿತು. ಇತ್ತ ಸರೋವರದ ಮೇಲೆ ಬಿರುಗಾಳಿ
ಬೀಸತೊಡಗಿತು. ದೋಣಿಯೊಳಗೆ ನೀರು ತುಂಬತೊಡಗಿತು.
ದೋಣಿಯಲ್ಲಿದ್ದವರೆಲ್ಲರೂ ಅಪಾಯಕ್ಕೀಡಾದರು. 24ಆಗ
ಶಿಷ್ಯರು ಯೇಸುವಿನ ಬಳಿಗೆ ಹೋಗಿ ಆತನನ್ನು ಎಬ್ಬಿಸಿ,
‘‘ಗುರುವೇ! ಗುರುವೇ! ನಾವು ಮುಳುಗಿಹೋಗುತ್ತಿದ್ದೇವೆ!’’
ಎಂದು ಹೇಳಿದರು.

ಕೂಡಲೇ ಯೇಸು ಎದ್ದು, ಆ ಗಾಳಿಗೂ ತೆರೆಗಳಿಗೂ
ಆಜ್ಞಾಪಿಸಿದನು. ಆಗ ಬಿರುಗಾಳಿ ನಿಂತಿತು ಮತ್ತು ಸರೋವರ
ಶಾಂತವಾಯಿತು. 25ಯೇಸು ತನ್ನ ಶಿಷ್ಯರಿಗೆ, ‘‘ಎಲ್ಲಿ ಹೋಯಿತು
ನಿಮ್ಮ ನಂಬಿಕೆ?’’ ಎಂದು ಕೇಳಿದನು.

ಶಿಷ್ಯರು ಭಯಪಟ್ಟರು ಮತ್ತು ವಿಸ್ಮಯಗೊಂಡರು.
‘‘ಈತನು ಯಾರಿರಬಹುದು? ಈತನು ಗಾಳಿಗೂ ನೀರಿಗೂ
ಆಜ್ಞಾಪಿಸುತ್ತಾನೆ. ಅವು ವಿಧೇಯವಾಗುತ್ತವೆ!’’ ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು.

## ದೆವ್ವಗಳಿಂದ ಪೀಡಿತನಾಗಿದ್ದ ಮನುಷ್ಯ

(ಮತ್ತಾಯ 8:28-34; ಮಾರ್ಕ 5:1-20)

26ಯೇಸು ಮತ್ತು ಆತನ ಶಿಷ್ಯರು ಗಲಿಲೇಯದಿಂದ
ಸರೋವರವನ್ನು ದಾಟಿ, ಗೆರೆಸೇನರ ನಾಡಿಗೆ ಪ್ರಯಾಣ
ಮಾಡಿದರು. 27ಯೇಸು ದೋಣಿಯಿಂದ ಇಳಿದಾಗ, ಆ
ಪಟ್ಟಣದ ಮನುಷ್ಯನೊಬ್ಬನು ಯೇಸುವಿನ ಬಳಿಗೆ ಬಂದನು.
ಈ ಮನುಷ್ಯನಿಗೆ ದೆವ್ವ ಹಿಡಿದಿತ್ತು. ಬಹಳ ಕಾಲದಿಂದ ಅವನು
ಬಟ್ಟೆಯನ್ನೇ ಹಾಕಿಕೊಂಡಿರಲಿಲ್ಲ. ಅವನು ಸಮಾಧಿಯ
ಗವಿಗಳಲ್ಲಿ ವಾಸಿಸುತ್ತಿದ್ದನು. 28-29ದೆವ್ವವು ಅವನನ್ನು ಪದೇ
ಪದೇ ವಶಪಡಿಸಿಕೊಳ್ಳುತ್ತಿತ್ತು. ಆ ಮನುಷ್ಯನನ್ನು ಸೆರೆಮನೆಗೆ
ಹಾಕಿ ಕೈಕಾಲುಗಳನ್ನು ಸರಪಣಿಗಳಿಂದ ಕಟ್ಟಿದರೂ ಅವನು
ಅವುಗಳನ್ನು ಕಿತ್ತೊಗೆದುಬಿಡುತ್ತಿದ್ದನು. ಅವನೊಳಗಿದ್ದ ದೆವ್ವವು
ಅವನನ್ನು ಜನರಿಲ್ಲದ ಸ್ಥಳಗಳಿಗೆ ಬಲವಂತವಾಗಿ
ಕೊಂಡೊಯ್ಯುತ್ತಿತ್ತು. ಯೇಸು ಆ ದೆವ್ವಕ್ಕೆ, ‘‘ಅವನನ್ನು
ಬಿಟ್ಟುಹೋಗು’’ ಎಂದು ಆಜ್ಞಾಪಿಸಿದನು. ಆ ಮನುಷ್ಯನು
ಯೇಸುವಿನ ಮುಂದೆ ಅಡ್ಡಬಿದ್ದು ಗಟ್ಟಿಯಾದ ಸ್ವರದಿಂದ,
‘‘ಯೇಸುವೇ, ಮಹೋನ್ನತನಾದ ದೇವರ ಮಗನೇ, ನನ್ನಿಂದ
ನಿನಗೇನಾಗ ಬೇಕಾಗಿದೆ? ದಯಮಾಡಿ ನನ್ನನ್ನು ದಂಡಿಸ
ಬೇಡ!’’ ಎಂದು ಕೂಗಿದನು.

30‘‘ನಿನ್ನ ಹೆಸರೇನು?’’ ಎಂದು ಯೇಸು ಕೇಳಿದನು.
‘‘ದಂಡು’’ ಎಂದು ಅವನು ಉತ್ತರಿಸಿದನು. (ಏಕೆಂದರೆ
ಅವನೊಳಗೆ ಅನೇಕ ದೆವ್ವಗಳು ಸೇರಿಕೊಂಡಿದ್ದವು.) 31ತಮ್ಮನ್ನು
ಪಾತಾಳಕ್ಕೆ ಕಳುಹಿಸಕೂಡದೆಂದು ಆ ದೆವ್ವಗಳು ಯೇಸುವನ್ನು
ಬೇಡಿಕೊಂಡವು. 32ಅಲ್ಲಿದ್ದ ಒಂದು ಗುಡ್ಡದ ಮೇಲೆ ಹಂದಿಗಳ
ಒಂದು ದೊಡ್ಡ ಗುಂಪು ಮೇಯುತ್ತಿತ್ತು. ಹಂದಿಗಳೊಳಗೆ
ಹೋಗಲು ತಮಗೆ ಅನುಮತಿ ಕೊಡಬೇಕೆಂದು ಆ ದೆವ್ವಗಳು
ಯೇಸುವನ್ನು ಬೇಡಿಕೊಂಡವು. ಯೇಸು ಅವುಗಳಿಗೆ ಅನುಮತಿ
ಕೊಟ್ಟನು. 33ಆಗ ದೆವ್ವಗಳು ಆ ಮನುಷ್ಯನಿಂದ ಹೊರಬಂದು
ಹಂದಿಗಳೊಳಗೆ ಸೇರಿಕೊಂಡವು. ಆ ಕೂಡಲೇ ಹಂದಿಗಳ
ಗುಂಪು ಗುಡ್ಡದ ಕೆಳಗೆ ಓಡಿಹೋಗಿ ಸರೋವರದಲ್ಲಿ ಬಿದ್ದು
ಮುಳುಗಿಹೋದವು.

34ಹಂದಿಗಳನ್ನು ಕಾಯುತ್ತಿದ್ದವರು ಓಡಿಹೋಗಿ, ನಡೆದ ಈ
ಸಂಗತಿಯನ್ನು ಹೊಲಗಳಲ್ಲಿಯೂ ಊರುಗಳಲ್ಲಿಯೂ ಇದ್ದ
ಜನರಿಗೆ ತಿಳಿಸಿದರು. 35ಅದನ್ನು ನೋಡಲು ಜನರೆಲ್ಲರೂ
ಯೇಸುವಿದ್ದಲ್ಲಿಗೆ ಬಂದರು. ಆ ಮನುಷ್ಯನು ಯೇಸುವಿನ
ಪಾದಗಳ ಬಳಿಯಲ್ಲಿ ಕುಳಿತಿದ್ದುದನ್ನು ಅವರು ನೋಡಿದರು.
ಅವನು ಬಟ್ಟೆಗಳನ್ನು ಹಾಕಿಕೊಂಡಿದ್ದನು; ಸ್ವಸ್ಥಬುದ್ಧಿಯುಳ್ಳವ
ನಾಗಿದ್ದನು. ದೆವ್ವಗಳು ಅವನನ್ನು ಬಿಟ್ಟುಹೋಗಿದ್ದವು. ಜನರಿಗೆ
ಭಯವಾಯಿತು. 36ಯೇಸು ಆ ಮನುಷ್ಯನನ್ನು ಗುಣಪಡಿಸಿದ
ರೀತಿಯನ್ನು ನೋಡಿದ್ದವರು ಆತನನ್ನು ನೋಡಲು ಬಂದ
ಜನರೆಲ್ಲರಿಗೂ ಆ ಘಟನೆಯನ್ನು ವಿವರಿಸಿ ಹೇಳಿದರು.
37ಜನರು ಯೇಸುವಿಗೆ, ‘‘ನೀನು ಇಲ್ಲಿಂದ ಹೊರಟುಹೋಗು’’
ಎಂದು ಕೇಳಿಕೊಂಡರು. ಏಕೆಂದರೆ ಅವರು ಬಹಳ
ಭಯಗೊಂಡಿದ್ದರು. ಆದ್ದರಿಂದ ಯೇಸು ದೋಣಿಯನ್ನು ಹತ್ತಿ
ಮತ್ತೆ ಗಲಿಲೇಯಕ್ಕೆ ಹಿಂತಿರುಗಿದನು. 38ದೆವ್ವಗಳಿಂದ ಬಿಡು
ಗಡೆಯಾಗಿದ್ದವನು, ‘‘ನನ್ನನ್ನು ನಿನ್ನ ಜೊತೆಯಲ್ಲೇ ಕರೆದು
ಕೊಂಡು ಹೋಗು,’’ ಎಂದು ಕೇಳಿಕೊಂಡನು. 39ಅದಕ್ಕೆ
ಯೇಸು, ‘‘ನಿನ್ನ ಮನೆಗೆ ಹಿಂತಿರುಗಿ ಹೋಗು. ದೇವರು ನಿನಗೆ
ಮಾಡಿದ ಉಪಕಾರವನ್ನು ಜನರಿಗೆ ತಿಳಿಸು’’ ಎಂದು ಹೇಳಿ
ಅವನನ್ನು ಕಳುಹಿಸಿದನು. ಆದ್ದರಿಂದ ಆ ಮನುಷ್ಯನು ಅಲ್ಲಿಂದ
ಹೊರಟು ಹೋಗಿ ಯೇಸು ತನಗೆ ಮಾಡಿದ ಉಪಕಾರವನ್ನು
ಊರಲ್ಲೆಲ್ಲಾ ತಿಳಿಸಿದನು.

## ಸತ್ತುಹೋಗಿದ್ದ ಹುಡುಗಿಗೆ ಜೀವದಾನ. ಕಾಯಿಲೆಯ ಸ್ತ್ರೀಗೆ ಆರೋಗ್ಯದಾನ

(ಮತ್ತಾಯ 9:18-26; ಮಾರ್ಕ 5:21-43)

40ಯೇಸು ಗಲಿಲೇಯಕ್ಕೆ ಹಿಂತಿರುಗಿದಾಗ ಜನರು
ಆತನನ್ನು ಸ್ವಾಗತಿಸಿದರು. ಪ್ರತಿಯೊಬ್ಬರೂ ಆತನಿಗಾಗಿ ಕಾಯು
ತ್ತಿದ್ದರು. 41ಯಾಯಿರನೆಂಬ ಒಬ್ಬ ಮನುಷ್ಯನು ಯೇಸುವಿನ
ಬಳಿಗೆ ಬಂದನು. ಅವನು ಸಭಾಮಂದಿರದ ಅಧಿಕಾರಿ
ಯಾಗಿದ್ದನು. ಅವನು ಯೇಸುವಿನ ಪಾದಗಳಿಗೆ ಅಡ್ಡಬಿದ್ದು
ತನ್ನ ಮನೆಗೆ ಬರಬೇಕೆಂದು ಬೇಡಿಕೊಂಡನು. 42ಅವನಿಗೆ
ಒಬ್ಬಳೇ ಮಗಳಿದ್ದಳು. ಆಕೆಗೆ ಹನ್ನೆರಡು ವರ್ಷ ವಯಸ್ಸಾಗಿತ್ತು.
ಆಕೆಯು ಸಾಯುವ ಸ್ಥಿತಿಯಲ್ಲಿದ್ದಳು.

ಯೇಸುವು ಯಾಯಿರನ ಮನೆಗೆ ಹೋಗುತ್ತಿದ್ದಾಗ ಜನರು
ಆತನ ಸುತ್ತಲೂ ಸೇರಿಬಂದರು. 43ಹನ್ನೆರಡು ವರ್ಷಗಳಿಂದ
ರಕ್ತಸ್ರಾವವಾಗುತ್ತಿದ್ದ ಸ್ತ್ರೀಯೊಬ್ಬಳು ಅಲ್ಲಿದ್ದಳು. ಆಕೆ ತನ್ನಲ್ಲಿದ್ದ
ಹಣವನ್ನೆಲ್ಲಾ ವೈದ್ಯರಿಗೆ ಖರ್ಚು ಮಾಡಿದ್ದಳು. ಆದರೆ ಯಾವ
ವೈದ್ಯನಿಗೂ ಆಕೆಯನ್ನು ವಾಸಿಮಾಡಲು ಸಾಧ್ಯವಾಗಿರಲಿಲ್ಲ.
44ಆ ಸ್ತ್ರೀಯು ಯೇಸುವಿನ ಹಿಂದೆ ಬಂದು ಆತನ ನಿಲುವಂಗಿಯ
ಕೆಳಭಾಗವನ್ನು ಮುಟ್ಟಿದಳು. ಆ ಕ್ಷಣವೇ ಆಕೆಯ ರಕ್ತಸ್ರಾವ
ನಿಂತುಹೋಯಿತು. 45ಆಗ ಯೇಸು, ‘‘ನನ್ನನ್ನು ಮುಟ್ಟಿದವರು
ಯಾರು?’’ ಎಂದು ಕೇಳಿದನು.

ಜನರೆಲ್ಲರೂ ತಾವು ಮುಟ್ಟಲಿಲ್ಲವೆಂದು ಹೇಳುತ್ತಿರಲು
ಪೇತ್ರನು, ‘‘ಗುರುವೇ, ಇಷ್ಟೊಂದು ಜನರು ಮೇಲೆ ಬೀಳುತ್ತಾ
ನಿನ್ನನ್ನು ನೂಕುತ್ತಿದ್ದಾರಲ್ಲಾ’’ ಎಂದನು.

46ಅದಕ್ಕೆ ಯೇಸು, ‘‘ಯಾರೋ ಒಬ್ಬರು ನನ್ನನ್ನು
ಮುಟ್ಟಿದರು! ನನ್ನಿಂದ ಶಕ್ತಿ ಹೊರಟದ್ದು ನನಗೆ ತಿಳಿಯಿತು’’
ಎಂದು ಹೇಳಿದನು. 47ಇನ್ನು ತಾನು ಅಡಗಿಕೊಂಡಿರಲು ಸಾಧ್ಯ
ವಿಲ್ಲವೆಂದು ತಿಳಿದುಕೊಂಡ ಆ ಸ್ತ್ರೀಯು ನಡುಗುತ್ತಾ ಆತನ
ಮುಂದೆ ಬಂದು ಅಡ್ಡಬಿದ್ದು ತಾನು ಮುಟ್ಟಿದ್ದಕ್ಕೆ ಕಾರಣವನ್ನು
ಎಲ್ಲರ ಎದುರಿನಲ್ಲಿ ತಿಳಿಸಿದಳು. ಅಲ್ಲದೆ ಆತನನ್ನು ಮುಟ್ಟಿದಾ
ಕ್ಷಣವೇ ತನಗೆ ವಾಸಿಯಾಯಿತೆಂದು ಹೇಳಿದಳು. 48ಯೇಸು
ಆಕೆಗೆ, ‘‘ಮಗಳೇ, ನೀನು ನಂಬಿದ್ದರಿಂದ ನಿನಗೆ ಸ್ವಸ್ಥವಾಯಿತು.
ಸಮಾಧಾನದಿಂದ ಹೋಗು’’ಎಂದು ಹೇಳಿದನು.
49ಯೇಸು ಇನ್ನೂ ಮಾತನಾಡುತ್ತಿದ್ದಾಗ ಸಭಾಮಂದಿರದ
ಅಧಿಕಾರಿಯ (ಯಾಯಿರನ) ಮನೆಯಿಂದ ಒಬ್ಬ ವ್ಯಕ್ತಿ ಬಂದು,
‘‘ನಿನ್ನ ಮಗಳು ಸತ್ತು ಹೋದಳು! ಈಗ ಬೋಧಕನಿಗೆ
(ಯೇಸುವಿಗೆ) ತೊಂದರೆ ಕೊಡಬೇಡ’’ ಎಂದು ಹೇಳಿದನು.
50ಯೇಸು ಇದನ್ನು ಕೇಳಿ ಯಾಯಿರನಿಗೆ, ‘‘ಭಯಪಡ
ಬೇಡ. ನಂಬಿಕೆಯೊಂದಿರಲಿ. ನಿನ್ನ ಮಗಳಿಗೆ ಗುಣ
ವಾಗುವುದು’’ ಎಂದು ಹೇಳಿದನು.
51ಯೇಸು ಯಾಯಿರನ ಮನೆಗೆ ಹೋದನು. ಪೇತ್ರ,
ಯೋಹಾನ, ಯಾಕೋಬ ಮತ್ತು ಹುಡುಗಿಯ ತಂದೆ
ತಾಯಿಗಳಿಗೆ ಮಾತ್ರ ತನ್ನೊಂದಿಗೆ ಬರಲು ಅನುಮತಿಕೊಟ್ಟನು.
ಬೇರೆ ಯಾರೂ ಒಳಗೆ ಬರಕೂಡದೆಂದು ಯೇಸು ತಿಳಿಸಿದನು.
52ಸತ್ತುಹೋದ ಆ ಬಾಲಕಿಗಾಗಿ ಜನರೆಲ್ಲರೂ ದುಃಖದಿಂದ
ಗೋಳಾಡುತ್ತಿದ್ದರು. ಆದರೆ ಯೇಸು ಅವರಿಗೆ, ‘‘ಅಳಬೇಡಿ, ಆಕೆ
ಸತ್ತಿಲ್ಲ; ನಿದ್ರಿಸುತ್ತಿದ್ದಾಳೆ’’ ಎಂದನು.
53ಆಗ ಜನರು ಯೇಸುವನ್ನು ಗೇಲಿ ಮಾಡಿದರು. ಏಕೆಂದರೆ
ಆ ಹುಡುಗಿ ಸತ್ತುಹೋದಳೆಂದು ಅವರಿಗೆ ಖಂಡಿತವಾಗಿ
ತಿಳಿದಿತ್ತು. 54ಆದರೆ ಯೇಸು ಆಕೆಯ ಕೈಯನ್ನು ಹಿಡಿದು,
‘‘ಮಗು, ಎದ್ದೇಳು!’’ ಎಂದನು. 55ಆ ಕೂಡಲೇ ಆಕೆಗೆ ಜೀವ
ಬಂದಿತು. ಆಕೆ ಎದ್ದು ನಿಂತುಕೊಂಡಳು. ಯೇಸು ಅವರಿಗೆ,
‘‘ಆಕೆಗೆ ತಿನ್ನಲು ಏನಾದರೂ ಕೊಡಿರಿ’’ ಎಂದು ಹೇಳಿದನು.
56ಬಾಲಕಿಯ ತಂದೆತಾಯಿಗಳು ಬೆರಗಾದರು. ಈ
ಘಟನೆಯ ಬಗ್ಗೆ ಯಾರಿಗೂ ತಿಳಿಸಬಾರದೆಂದು ಯೇಸು
ಅವರಿಗೆ ಆಜ್ಞಾಪಿಸಿದನು.

## ಅಪೊಸ್ತಲರ ಸುವಾರ್ತಾಸೇವೆ

(ಮತ್ತಾಯ 10:5-15; ಮಾರ್ಕ 6:7-13)

9 ಯೇಸು ಹನ್ನೆರಡು ಮಂದಿ ಅಪೊಸ್ತಲರನ್ನು ಒಟ್ಟಾಗಿ
ಕರೆದು ಅವರಿಗೆ ಕಾಯಿಲೆಗಳನ್ನು ವಾಸಿಮಾಡುವ
ಶಕ್ತಿಯನ್ನೂ ದೆವ್ವಗಳ ಮೇಲೆ ಅಧಿಕಾರವನ್ನೂ ಕೊಟ್ಟನು.
2ದೇವರ ರಾಜ್ಯದ ಬಗ್ಗೆ ತಿಳಿಸುವುದಕ್ಕೂ ಅಸ್ವಸ್ಥವಾದವರನ್ನು
ವಾಸಿಮಾಡುವುದಕ್ಕೂ ಯೇಸು ಅಪೊಸ್ತಲರನ್ನು ಕಳುಹಿಸಿದನು.
3ಆತನು ಅವರಿಗೆ ಹೇಳಿದ್ದೇನೆಂದರೆ; ‘‘ನೀವು ಪ್ರಯಾಣಕ್ಕಾಗಿ
ಊರುಗೋಲನ್ನಾಗಲಿ ಚೀಲವನ್ನಾಗಲಿ ಆಹಾರವನ್ನಾಗಲಿ
ಹಣವನ್ನಾಗಲಿ ತೆಗೆದುಕೊಂಡು ಹೋಗಬೇಡಿರಿ. ಎರಡು
ಅಂಗಿಗಳನ್ನೂ ತೆಗೆದುಕೊಳ್ಳಬೇಡಿ. 4ನೀವು ಒಂದು ಮನೆಯಲ್ಲಿ
ಇಳಿದುಕೊಂಡಾಗ, ಆ ಊರನ್ನು ಬಿಟ್ಟುಹೋಗುವ ಸಮಯದ
ವರೆಗೂ ಅಲ್ಲೇ ತಂಗಿರಿ. 5ಆ ಊರಿನ ಜನರು ನಿಮ್ಮನ್ನು
ಸ್ವಾಗತಿಸದಿದ್ದರೆ, ಆ ಊರಿನ ಹೊರಗೆ ಹೋಗಿ ನಿಮ್ಮ ಪಾದಗಳಿಗೆ
ಹತ್ತಿದ ಧೂಳನ್ನು ಝಾಡಿಸಿಬಿಡಿರಿ. ಅದು ಅವರಿಗೆ ಎಚ್ಚರಿಕೆ
ಯಾಗಿರುವುದು.’’
6ಆದ್ದರಿಂದ ಅಪೊಸ್ತಲರು ಹೊರಟು ಊರೂರುಗಳಿಗೆ
ಹೋಗಿ, ಎಲ್ಲೆಲ್ಲೂ ಸುವಾರ್ತೆಯನ್ನು ಸಾರಿದರು ಮತ್ತು
ರೋಗಿಗಳನ್ನು ವಾಸಿಮಾಡಿದರು.

## ಯೇಸುವಿನ ಬಗ್ಗೆ ಹೆರೋದನಿಗಾದ ಗಲಿಬಿಲಿ

(ಮತ್ತಾಯ 14:1-12; ಮಾರ್ಕ 6:14-29)

7ನಡೆಯುತ್ತಿದ್ದ ಎಲ್ಲಾ ಸಂಗತಿಗಳ ಬಗ್ಗೆ ರಾಜ್ಯಪಾಲ
ಹೆರೋದನು ಕೇಳಿ ಗಲಿಬಿಲಿಗೊಂಡನು. ಏಕೆಂದರೆ, ‘‘ಸ್ನಾನಿಕ
ಯೋಹಾನನೇ ಸತ್ತವರೊಳಗಿಂದ ಎದ್ದಿದ್ದಾನೆ’’ ಎಂದು
ಕೆಲವರು ಹೇಳುತ್ತಿದ್ದರು. 8ಇನ್ನು ಕೆಲವರು, ‘‘ಎಲೀಯನು
ನಮ್ಮ ಬಳಿಗೆ ಬಂದಿದ್ದಾನೆ’’ ಎಂದು ಹೇಳುತ್ತಿದ್ದರು. ಮತ್ತೆ
ಕೆಲವರು, ‘‘ಪೂರ್ವಕಾಲದ ಪ್ರವಾದಿಗಳಲ್ಲೊಬ್ಬನು ಜೀವಂತ
ವಾಗಿ ಎದ್ದಿದ್ದಾನೆ’’ ಎಂದು ಹೇಳುತ್ತಿದ್ದರು. 9ಹೆರೋದನು,
‘‘ನಾನು ಯೋಹಾನನ ತಲೆಯನ್ನು ಕತ್ತರಿಸಿದೆನು. ಆದರೆ
ಈ ಸಂಗತಿಗಳನ್ನು ಮಾಡುತ್ತಿರುವ ಈ ಮನುಷ್ಯನು
ಯಾರು?’’ ಎಂದು ಆಲೋಚಿಸುತ್ತಾ ಯೇಸುವನ್ನು ನೋಡಲು
ಪ್ರಯತ್ನಿಸಿದನು.

## ಐದು ಸಾವಿರಕ್ಕಿಂತಲೂ ಹೆಚ್ಚು ಜನರಿಗೆ ಊಟ

(ಮತ್ತಾಯ 14:13-21; ಮಾರ್ಕ 6:30-44; ಯೋಹಾನ 6:1-14)

10ಅಪೊಸ್ತಲರು ಸುವಾರ್ತಾ ಪ್ರಯಾಣದಿಂದ ಹಿಂತಿರುಗಿ
ಬಂದು, ತಾವು ಮಾಡಿದ ಸಂಗತಿಗಳನ್ನು ಯೇಸುವಿಗೆ ತಿಳಿಸಿದರು.
ಆಗ ಆತನು ಅವರನ್ನು ಬೆತ್ಸಾಯಿದ ಊರಿನ ಸಮೀಪಕ್ಕೆ
ಪ್ರತ್ಯೇಕವಾಗಿ ಕರೆದುಕೊಂಡು ಹೋದನು. ಅಲ್ಲಿ ಯೇಸು
ಮತ್ತು ಆತನ ಅಪೊಸ್ತಲರನ್ನು ಬಿಟ್ಟು ಬೇರೆ ಯಾರೂ ಇರಲಿಲ್ಲ.
11ಆದರೆ ಯೇಸು ಅಲ್ಲಿಗೆ ಹೋದದ್ದು ಜನರಿಗೆ ತಿಳಿಯಿತು.
ಅವರು ಆತನನ್ನು ಹಿಂಬಾಲಿಸಿದರು. ಯೇಸು ಅವರನ್ನು
ಸ್ವಾಗತಿಸಿ ದೇವರ ರಾಜ್ಯದ ಬಗ್ಗೆ ಅವರಿಗೆ ತಿಳಿಸಿದನು;
ಕಾಯಿಲೆಯ ಜನರನ್ನು ವಾಸಿಮಾಡಿದನು.
12ಅಂದು ಸಾಯಂಕಾಲ, ಹನ್ನೆರಡು ಮಂದಿ ಅಪೊಸ್ತಲರು
ಯೇಸುವಿನ ಬಳಿಗೆ ಬಂದು, ‘‘ಈ ಸ್ಥಳದಲ್ಲಿ ಯಾರೂ
ವಾಸವಾಗಿಲ್ಲ. ಆದ್ದರಿಂದ ಜನರನ್ನು ಕಳುಹಿಸಿಬಿಡು. ಅವರು
ಸುತ್ತಮುತ್ತಲಿರುವ ಹೊಲಗಳಿಗೂ ಊರುಗಳಿಗೂ ಹೋಗಿ
ಆಹಾರವನ್ನು ಕೊಂಡುಕೊಳ್ಳಲಿ ಮತ್ತು ರಾತ್ರಿ ನಿದ್ರಿಸಲು
ಸ್ಥಳವನ್ನು ಹುಡುಕಿಕೊಳ್ಳಲಿ’’ ಎಂದು ಹೇಳಿದರು.
13ಆದರೆ ಯೇಸು ಅಪೊಸ್ತಲರಿಗೆ, ‘‘ನೀವೇ ಅವರಿಗೆ ಸ್ವಲ್ಪ
ಆಹಾರ ಕೊಡಿರಿ’’ ಎಂದು ಹೇಳಿದನು.
ಅದಕ್ಕೆ ಅಪೊಸ್ತಲರು, ‘‘ನಮ್ಮಲ್ಲಿ ಕೇವಲ ಐದು ರೊಟ್ಟಿ
ಮತ್ತು ಎರಡು ಮೀನುಗಳಿವೆ. ನಾವೇ ಹೋಗಿ ಈ ಜನರಿಗೆಲ್ಲಾ
ಆಹಾರವನ್ನು ಕೊಂಡುಕೊಳ್ಳಬೇಕೇ?’’ ಎಂದು ಕೇಳಿದರು.
14(ಅಲ್ಲಿ ಸುಮಾರು ಐದು ಸಾವಿರ ಮಂದಿ ಗಂಡಸರು ಇದ್ದರು.)
ಯೇಸು ತನ್ನ ಶಿಷ್ಯರಿಗೆ, ‘‘ಇವರನ್ನು ಸುಮಾರು ಐವತ್ತೈವತ್ತು
ಜನರಂತೆ ಸಾಲಾಗಿ ಕುಳ್ಳಿರಿಸಿರಿ’’ ಅಂದನು.
15ಅಂತೆಯೇ ಶಿಷ್ಯರು ಮಾಡಿದರು. ಜನರೆಲ್ಲರೂ ನೆಲದ
ಮೇಲೆ ಕುಳಿತುಕೊಂಡರು. 16ಆಗ ಯೇಸು ಐದು ರೊಟ್ಟಿ ಮತ್ತು

ಎರಡು ಮೀನುಗಳನ್ನು ಕೈಯಲ್ಲಿ ತೆಗೆದುಕೊಂಡು, ಆಕಾಶದ
ಕಡೆಗೆ ನೋಡಿ, ಅವುಗಳಿಗಾಗಿ ದೇವರಿಗೆ ಸ್ತೋತ್ರ ಸಲ್ಲಿಸಿದನು.
ಬಳಿಕ ಯೇಸು ಅವುಗಳನ್ನು ಮುರಿದು ಶಿಷ್ಯರಿಗೆ ಕೊಟ್ಟು,
ಜನರಿಗೆ ಹಂಚಬೇಕೆಂದು ಹೇಳಿದನು. 17ಎಲ್ಲರೂ ತಿಂದು
ತೃಪ್ತರಾದರು. ತಿನ್ನಲಾರದೆ ಬಿಟ್ಟಿದ್ದ ಆಹಾರದ ತುಂಡುಗಳನ್ನು
ಶೇಖರಿಸಿದಾಗ ಹನ್ನೆರಡು ಬುಟ್ಟಿಗಳು ತುಂಬಿಹೋದವು.

## ಯೇಸುವೇ ಕ್ರಿಸ್ತನು

(ಮತ್ತಾಯ 16:13-19; ಮಾರ್ಕ 8:27-29)

18ಒಮ್ಮೆ ಯೇಸು ಏಕಾಂತವಾಗಿ ಪ್ರಾರ್ಥನೆ ಮಾಡು
ತ್ತಿದ್ದನು. ಆತನ ಶಿಷ್ಯರು ಒಟ್ಟಾಗಿ ಅಲ್ಲಿಗೆ ಬಂದರು. ಯೇಸು
ಅವರಿಗೆ, ‘‘ಜನರು ನನ್ನನ್ನು ಯಾರೆಂದು ಹೇಳುತ್ತಾರೆ?’’
ಎಂದು ಕೇಳಿದನು.

19ಅದಕ್ಕೆ ಶಿಷ್ಯರು, ‘‘ಕೆಲವು ಜನರು ನಿನ್ನನ್ನು ‘ಸ್ನಾನಿಕನಾದ
ಯೋಹಾನ’ ಎನ್ನುತ್ತಾರೆ. ಇನ್ನು ಕೆಲವರು, ‘ಎಲೀಯ’
ಎನ್ನುತ್ತಾರೆ. ಮತ್ತೆ ಕೆಲವರು, ‘ಪೂರ್ವಕಾಲದ ಪ್ರವಾದಿಗಳಲ್ಲಿ
ಒಬ್ಬನು ಜೀವಂತವಾಗಿ ಎದ್ದುಬಂದಿದ್ದಾನೆ’ ಎನ್ನುತ್ತಾರೆ’’ ಎಂದು
ಉತ್ತರಿಸಿದರು.

20ಆಗ ಯೇಸು, ‘‘ನೀವು ನನ್ನನ್ನು ಯಾರೆನ್ನುತ್ತೀರಿ?’’
ಎಂದು ಶಿಷ್ಯರನ್ನು ಕೇಳಿದನು. ಪೇತ್ರನು, ‘‘ನೀನು ದೇವರಿಂದ
ಬಂದ ಕ್ರಿಸ್ತನು’’ ಎಂದು ಉತ್ತರ ಕೊಟ್ಟನು.

21ಈ ವಿಷಯವನ್ನು ಯಾರಿಗೂ ಹೇಳಬಾರದೆಂದು
ಯೇಸು ಅವರನ್ನು ಎಚ್ಚರಿಸಿದನು. 22ಬಳಿಕ ಯೇಸು, ‘‘ಮನುಷ್ಯ
ಕುಮಾರನು ಅನೇಕ ಸಂಕಟಗಳನ್ನು ಅನುಭವಿಸಬೇಕಾಗಿದೆ.
ಆತನು ಹಿರಿಯ ಯೆಹೂದ್ಯ ನಾಯಕರಿಂದಲೂ ಮಹಾ
ಯಾಜಕರಿಂದಲೂ ಧರ್ಮೋಪದೇಶಕರಿಂದಲೂ ತಿರಸ್ಕೃತ
ನಾಗಿ ಕೊಲ್ಲಲ್ಪಟ್ಟು ಮೂರನೆಯ ದಿನದಲ್ಲಿ ಜೀವಂತವಾಗಿ ಎದ್ದು
ಬರುವನು’’ ಎಂದು ಹೇಳಿದನು.

23ಯೇಸು ತನ್ನ ಮಾತನ್ನು ಮುಂದುವರಿಸಿ ಅವರೆಲ್ಲರಿಗೆ
ಹೇಳಿದ್ದೇನೆಂದರೆ: ‘‘ನನ್ನ ಹಿಂಬಾಲಕನಾಗಬಯಸುವವನು
ತನ್ನನ್ನು ನಿರಾಕರಿಸಿ, ದಿನಾಲೂ ತನ್ನ ಶಿಲುಬೆಯನ್ನು (ತನ
ಗಾಗುವ ಹಿಂಸೆಯನ್ನು) ಹೊತ್ತುಕೊಂಡು ನನ್ನನ್ನು ಹಿಂಬಾಲಿ
ಸಲಿ.

24ತನ್ನ ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು
ಅದನ್ನು ಕಳೆದುಕೊಳ್ಳುವನು. ನನಗೋಸ್ಕರ ತನ್ನ ಜೀವವನ್ನು
ಕೊಡುವವನು ಅದನ್ನು ಉಳಿಸಿಕೊಳ್ಳುವನು. 25ಒಬ್ಬನು ಇಡೀ
ಲೋಕವನ್ನೇ ಸಂಪಾದಿಸಿಕೊಂಡು,ತನ್ನನ್ನೇ ಕೆಡಿಸಿಕೊಂಡರೆ
ಅಥವಾ ನಷ್ಟಪಡಿಸಿಕೊಂಡರೆ ಅದರಿಂದ ಅವನಿಗೆ ಲಾಭ
ವೇನು?

26ಯಾವನಾದರೂ ನನಗೂ ನನ್ನ ಉಪದೇಶಕ್ಕೂ
ನಾಚಿಕೊಳ್ಳುವುದಾದರೆ, ನಾನು ನನ್ನ ಮಹಿಮೆಯೊಡನೆ,
ತಂದೆಯ ಮಹಿಮೆಯೊಡನೆ ಮತ್ತು ಪರಿಶುದ್ಧ ದೂತರ ಮಹಿಮೆ
ಯೊಡನೆ ಬಂದಾಗ ಅವನ ವಿಷಯದಲ್ಲಿ ನಾಚಿಕೊಳ್ಳುವೆನು.
27ನಾನು ಸತ್ಯವನ್ನು ಹೇಳುತ್ತೇನೆ. ಇಲ್ಲಿ ನಿಂತಿರುವ ಕೆಲವರು
ತಾವು ಸಾಯುವುದಕ್ಕಿಂತ ಮೊದಲು ದೇವರ ರಾಜ್ಯವನ್ನು
ನೋಡುವರು.’’

## ಮೋಶೆ, ಎಲೀಯ ಮತ್ತು ಯೇಸು

(ಮತ್ತಾಯ 17:1-8; ಮಾರ್ಕ 9:2-8)

28ಯೇಸು ಈ ಸಂಗತಿಗಳನ್ನು ಹೇಳಿ ಸುಮಾರು ಎಂಟು
ದಿನಗಳಾದ ನಂತರ, ಪೇತ್ರ, ಯಾಕೋಬ ಮತ್ತು ಯೋಹಾನ
ರನ್ನು ಕರೆದುಕೊಂಡು ಪ್ರಾರ್ಥನೆ ಮಾಡುವುದಕ್ಕೆ ಬೆಟ್ಟದ ಮೇಲೆ
ಹೋದನು. 29ಯೇಸು ಪ್ರಾರ್ಥಿಸುತ್ತಿದ್ದಾಗ, ಆತನ ಮುಖವು
ರೂಪಾಂತರವಾಯಿತು. ಆತನ ಬಟ್ಟೆಗಳು ಬೆಳ್ಳಗೆ ಹೊಳೆಯ
ತೊಡಗಿದವು. 30ಆಗ ಇಬ್ಬರು ಪ್ರವಾದಿಗಳು ಯೇಸುವಿನೊಡನೆ
ಮಾತನಾಡುತ್ತಿದ್ದರು. ಅವರು ಮೋಶೆ ಮತ್ತು ಎಲೀಯ.
31ಇವರಿಬ್ಬರು ಸಹ ಪ್ರಕಾಶಮಾನವಾಗಿ ಹೊಳೆಯುತ್ತಿದ್ದರು.
ಜೆರುಸಲೇಮಿನಲ್ಲಿ ಸಂಭವಿಸಲಿಕ್ಕಿದ್ದ ಆತನ ಮರಣದ ಬಗ್ಗೆ
ಅವರು ಮಾತಾಡುತ್ತಿದ್ದರು. 32ಗಾಢನಿದ್ರೆಯಲ್ಲಿದ್ದ ಪೇತ್ರ
ಮತ್ತು ಇತರರು ಎಚ್ಚೆತ್ತಾಗ ಯೇಸುವಿನ ಮಹಿಮೆಯನ್ನೂ
ಯೇಸುವಿನೊಡನೆ ನಿಂತಿದ್ದ ಅವರಿಬ್ಬರನ್ನೂ ಕಂಡರು.
33ಮೋಶೆ ಮತ್ತು ಎಲೀಯ ಆತನನ್ನು ಬಿಟ್ಟುಹೋಗು
ತ್ತಿರುವಾಗ, ಪೇತ್ರನು, ‘‘ಗುರುವೇ, ನಾವು ಇಲ್ಲೇ ಇರುವುದು
ಒಳ್ಳೆಯದು. ಇಲ್ಲಿ ನಾವು ಮೂರು ಗುಡಾರಗಳನ್ನು ಹಾಕುತ್ತೇವೆ.
ನಿನಗೊಂದು, ಮೋಶೆಗೊಂದು ಮತ್ತು ಎಲೀಯನಿಗೊಂದು’’
ಎಂದು ಹೇಳಿದನು. (ಪೇತ್ರನಿಗೆ ತಾನು ಏನು ಹೇಳು
ತ್ತಿದ್ದೇನೆಂದು ತಿಳಿಯಲಿಲ್ಲ.)

34ಪೇತ್ರನು ಈ ಸಂಗತಿಗಳನ್ನು ಹೇಳುತ್ತಿದ್ದಾಗ, ಮೋಡವು,
ಬಂದು ಅವರ ಸುತ್ತಲೂ ಆವರಿಸಿತು. ಆಗ ಪೇತ್ರ, ಯಾಕೋಬ
ಮತ್ತು ಯೋಹಾನರಿಗೆ ಭಯವಾಯಿತು. 35ಮೋಡದೊಳ
ಗಿಂದ, ‘‘ಈತನು ನನ್ನ ಮಗನು. ನಾನು ಆರಿಸಿಕೊಂಡವನು
ಇವನೇ. ಈತನಿಗೆ ವಿಧೇಯರಾಗಿರಿ’’ ಎಂಬ ವಾಣಿ ಕೇಳಿಸಿತು.

36ಆ ವಾಣಿ ಆದ ಮೇಲೆ ಅವರು ಯೇಸುವನ್ನು ಮಾತ್ರ
ಕಂಡರು. ಪೇತ್ರ, ಯಾಕೋಬ ಯೋಹಾನರು ತಾವು ಕಂಡ ಈ
ಸಂಗತಿಗಳಲ್ಲಿ ಒಂದನ್ನಾದರೂ ಆ ದಿವಸಗಳಲ್ಲಿ ಯಾರಿಗೂ
ತಿಳಿಸದೆ ಮೌನವಾಗಿದ್ದರು

## ದೆವ್ವದಿಂದ ಪೀಡಿತನಾಗಿದ್ದ ಬಾಲಕನಿಗೆ ಬಿಡುಗಡೆ

(ಮತ್ತಾಯ 17:14-18; ಮಾರ್ಕ 9:14-27)

37ಮರುದಿನ, ಯೇಸು, ಪೇತ್ರ, ಯಾಕೋಬ ಮತ್ತು
ಯೋಹಾನ ಬೆಟ್ಟದಿಂದಿಳಿದು ಬಂದರು. ಜನರ ಬಹು ದೊಡ್ಡ
ಗುಂಪೊಂದು ಯೇಸುವನ್ನು ಎದುರುಗೊಂಡಿತು. 38ಗುಂಪಿ
ನಲ್ಲಿದ್ದ ಒಬ್ಬ ಮನುಷ್ಯನು, ‘‘ಉಪದೇಶಕನೇ, ದಯಮಾಡಿ
ಬಂದು ನನ್ನ ಮಗನನ್ನು ನೋಡು. ನನಗೆ ಅವನೊಬ್ಬನೇ
ಮಗನು.

39ದೆವ್ವವೊಂದು ನನ್ನ ಮಗನೊಳಗೆ ಬರುತ್ತದೆ. ಆಗ ಅವನು
ಕೂಗಾಡುತ್ತಾನೆ. ಸ್ವಾಧೀನ ಕಳೆದುಕೊಂಡು ಬಾಯಿಂದ
ನೊರೆಸುರಿಸುತ್ತಾನೆ. ದೆವ್ವವು ಅವನನ್ನು ಒದ್ದಾಡಿಸಿ ಜಜ್ಜದ
ಹೊರತು ಬಿಟ್ಟುಬಿಡುವುದೇ ಇಲ್ಲ. 40ನನ್ನ ಮಗನನ್ನು
ದೆವ್ವದಿಂದ ಬಿಡಿಸಬೇಕೆಂದು ನಿನ್ನ ಶಿಷ್ಯರನ್ನೂ ಬೇಡಿಕೊಂಡೆನು.
ಆದರೆ ಅವರಿಂದ ಸಾಧ್ಯವಾಗಲಿಲ್ಲ’’ ಎಂದು ಯೇಸುವಿಗೆ ಕೂಗಿ
ಹೇಳಿದನು.

41ಆಗ ಯೇಸು, ‘‘ನಂಬಿಕೆಯಿಲ್ಲದ ದುಷ್ಟಸಂತಾನವೇ,
ಇನ್ನೆಷ್ಟು ಕಾಲ ನಾನು ನಿಮ್ಮ ಸಂಗಡ ತಾಳ್ಮೆಯಿಂದ ಇರಲಿ?’’

ಎಂದು ಉತ್ತರಿಸಿ, ಆ ಮನುಷ್ಯನಿಗೆ, ''ನಿನ್ನ ಮಗನನ್ನು ಇಲ್ಲಿಗೆ
ಕರೆದುಕೊಂಡು ಬಾ'' ಅಂದನು.
42 ಆ ಹುಡುಗನು ಬರುತ್ತಿದ್ದಾಗ, ದೆವ್ವವು ಅವನನ್ನು ನೆಲಕ್ಕೆ
ಅಪ್ಪಳಿಸಿತು. ಹುಡುಗನು ತನ್ನ ಸ್ವಾಧೀನ ಕಳೆದುಕೊಂಡನು. ಆಗ
ಯೇಸು ದೆವ್ವವನ್ನು ಗದರಿಸಿ, ಆ ಹುಡುಗನನ್ನು ಗುಣಪಡಿಸಿ
ದನು. ಬಳಿಕ ಅವನನ್ನು ಅವನ ತಂದೆಗೆ ಒಪ್ಪಿಸಿಕೊಟ್ಟನು. 43 ಜನ
ರೆಲ್ಲರೂ ದೇವರ ಮಹಾಶಕ್ತಿಯನ್ನು ಕಂಡು ಬೆರಗಾದರು.

### ತನ್ನ ಮರಣದ ಬಗ್ಗೆ ಯೇಸುವಿನ ಪ್ರಕಟನೆ
(ಮತ್ತಾಯ 17:22-23; ಮಾರ್ಕ 9:30-32)

ಯೇಸು ಮಾಡಿದ ಎಲ್ಲಾ ಕಾರ್ಯಗಳ ಬಗ್ಗೆ ಜನರು ಇನ್ನೂ
ಆಶ್ಚರ್ಯಚಕಿತರಾಗಿದ್ದರು. ಯೇಸು ತನ್ನ ಶಿಷ್ಯರಿಗೆ,
44 ''ಮನುಷ್ಯಕುಮಾರನನ್ನು ಕೆಲವರ ವಶಕ್ಕೆ ಒಪ್ಪಿಸ
ಲಾಗುವುದು. ನೀವು ಇದನ್ನು ಮರೆಯಕೂಡದು'' ಎಂದು
ಹೇಳಿದನು. 45 ಆದರೆ ಯೇಸುವಿನ ಈ ಮಾತುಗಳು ಶಿಷ್ಯರಿಗೆ
ಅರ್ಥವಾಗಲಿಲ್ಲ. ಏಕೆಂದರೆ ಅವುಗಳ ಅರ್ಥವು ಅವರಿಗೆ
ಮರೆಯಾಗಿತ್ತು. ಆದರೂ ಯೇಸು ಹೇಳಿದ್ದರ ಬಗ್ಗೆ ಆತನನ್ನು
ಕೇಳುವದಕ್ಕೆ ಶಿಷ್ಯರು ಭಯಪಟ್ಟರು.

### ಅತ್ಯಂತ ದೊಡ್ಡ ವ್ಯಕ್ತಿ
(ಮತ್ತಾಯ 18:1-5; ಮಾರ್ಕ 9:33-37)

46 ತಮ್ಮಲ್ಲಿ ಯಾವನು ಅತ್ಯಂತ ಪ್ರಮುಖನು ಎಂಬುದರ
ಬಗ್ಗೆ ಯೇಸುವಿನ ಶಿಷ್ಯರು ವಾದ ಮಾಡತೊಡಗಿದರು. 47 ಅವರ
ಆಲೋಚನೆಯು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಯೇಸು
ಒಂದು ಚಿಕ್ಕ ಮಗುವನ್ನು ಕರೆದು ತನ್ನ ಬಳಿಯಲ್ಲಿ ನಿಲ್ಲಿಸಿದನು.
48 ಬಳಿಕ ಯೇಸು ತನ್ನ ಶಿಷ್ಯರಿಗೆ, ''ಒಬ್ಬನು ನನ್ನ ಹೆಸರಿನಲ್ಲಿ
ಒಂದು ಚಿಕ್ಕ ಮಗುವನ್ನು ಸ್ವೀಕರಿಸಿಕೊಂಡರೆ ಅವನು ನನ್ನನ್ನೇ
ಸ್ವೀಕರಿಸಿಕೊಂಡಂತಾಯಿತು. ಒಬ್ಬನು ನನ್ನನ್ನು ಸ್ವೀಕರಿಸಿ
ಕೊಂಡರೆ ಅವನು ನನ್ನನ್ನು ಕಳುಹಿಸಿದಾತನನ್ನೇ (ದೇವರನ್ನು)
ಸ್ವೀಕರಿಸಿಕೊಂಡಂತಾಯಿತು. ನಿಮ್ಮಲ್ಲಿ ಯಾವನು ದೀನ
ನಾಗಿದ್ದಾನೋ ಅವನೇ ನಿಮ್ಮಲ್ಲಿ ಪ್ರಮುಖನಾಗಿದ್ದಾನೆ'' ಎಂದು
ಹೇಳಿದನು.

### ನಿಮಗೆ ವಿರೋಧವಾಗಿಲ್ಲದ ವ್ಯಕ್ತಿ ನಿಮ್ಮವನೇ
(ಮಾರ್ಕ 9:38-40)

49 ಯೋಹಾನನು, ''ಗುರುವೇ, ನಿನ್ನ ಹೆಸರಿನ ಮೂಲಕ
ಜನರಿಂದ ದೆವ್ವಗಳನ್ನು ಬಿಡಿಸುತ್ತಿದ್ದ ಒಬ್ಬ ವ್ಯಕ್ತಿಯನ್ನು ನಾವು
ನೋಡಿದೆವು. ಅವನು ನಮ್ಮವನಲ್ಲದ ಕಾರಣ ನಿನ್ನ ಹೆಸರನ್ನು
ಬಳಸಕೂಡದೆಂದು ಅವನಿಗೆ ಹೇಳಿದೆವು'' ಎಂದರು.
50 ಅದಕ್ಕೆ ಯೇಸು, ''ಅವನಿಗೆ ಅಡ್ಡಿಮಾಡಬೇಡಿ.
ಏಕೆಂದರೆ, ನಿಮಗೆ ವಿರೋಧವಾಗಿಲ್ಲದವನು ನಿಮ್ಮವನೇ''
ಎಂದನು.

### ಸಮಾರ್ಯ ಪಟ್ಟಣ

51 ಯೇಸು ಮತ್ತೆ ಪರಲೋಕಕ್ಕೆ ಹಿಂತಿರುಗುವ ಸಮಯ
ಹತ್ತಿರವಾಗುತ್ತಿತ್ತು. ಆದ್ದರಿಂದ ಆತನು ಜೆರುಸಲೇಮಿಗೆ
ಹೋಗಲು ತೀರ್ಮಾನಿಸಿದನು. 52 ಯೇಸು ಕೆಲವರನ್ನು ತನ್ನ
ಮುಂದಾಗಿ ಕಳುಹಿಸಿದನು. ಯೇಸುವಿಗಾಗಿ ಪ್ರತಿಯೊಂದನ್ನು
ಸಿದ್ಧಪಡಿಸಲು ಅವರು ಸಮಾರ್ಯ ಪಟ್ಟಣಕ್ಕೆ ಹೋದರು.
53 ಆದರೆ ಆತನು ಜೆರುಸಲೇಮಿಗೆ ಹೋಗುತ್ತಿದ್ದ ಕಾರಣ
ಸಮಾರ್ಯದ ಜನರು ಆತನನ್ನು ಸ್ವಾಗತಿಸಲಿಲ್ಲ. 54 ಯೇಸುವಿನ
ಶಿಷ್ಯರಾದ ಯಾಕೋಬ ಮತ್ತು ಯೋಹಾನ ಇದನ್ನು ಕಂಡು,
''ಸ್ವಾಮೀ, ಆಕಾಶದಿಂದ ಬೆಂಕಿ ಬಿದ್ದು ಇವರನ್ನು ನಾಶಮಾಡಲಿ
ಎಂದು ನಾವು ಆಜ್ಞಾಪಿಸಬೇಕೆನ್ನುವಿಯೋ!'' * ಎಂದು
ಕೇಳಿದರು.
55 ಆದರೆ ಯೇಸು ಅವರ ಕಡೆಗೆ ತಿರುಗಿ ಗದರಿಸಿದನು. *
56 ಬಳಿಕ ಯೇಸು ಮತ್ತು ಆತನ ಶಿಷ್ಯರು ಇನ್ನೊಂದು ಪಟ್ಟಣಕ್ಕೆ
ಹೋದರು.

### ಯೇಸುವನ್ನು ಹಿಂಬಾಲಿಸಿ
(ಮತ್ತಾಯ 8:19-22)

57 ಅವರೆಲ್ಲರೂ ದಾರಿಯಲ್ಲಿ ಹೋಗುತ್ತಿದ್ದಾಗ, ಒಬ್ಬನು
ಯೇಸುವಿಗೆ, ''ನೀನು ಎಲ್ಲಿಗೆ ಹೋದರೂ ನಾನು ನಿನ್ನನ್ನು
ಹಿಂಬಾಲಿಸುತ್ತೇನೆ'' ಎಂದನು.
58 ಯೇಸು, ''ನರಿಗಳಿಗೆ ಗುಹೆಗಳಿವೆ, ಪಕ್ಷಿಗಳಿಗೆ ಗೂಡು
ಗಳಿವೆ. ಆದರೆ ಮನುಷ್ಯಕುಮಾರನಿಗೆ ತಲೆ ಇಡುವಷ್ಟು ಸ್ಥಳವೂ
ಇಲ್ಲ'' ಎಂದು ಉತ್ತರಿಸಿದನು.
59 ಯೇಸು ಇನ್ನೊಬ್ಬನಿಗೆ, ''ನನ್ನನ್ನು ಹಿಂಬಾಲಿಸು!''
ಎಂದನು.

ಆದರೆ ಅವನು, ''ಸ್ವಾಮೀ, ನಾನು ಮೊದಲು ಹೋಗಿ ನನ್ನ
ತಂದೆಯ ಅಂತ್ಯಕ್ರಿಯೆಯನ್ನು ಮಾಡಲು ಅವಕಾಶ ನೀಡು''
ಎಂದು ಹೇಳಿದನು.
60 ಯೇಸು ಅವನಿಗೆ, ''ಸತ್ತ ಜನರೇ ತಮ್ಮವರಲ್ಲಿ
ಸತ್ತುಹೋದವರ ಅಂತ್ಯಕ್ರಿಯೆ ಮಾಡಲಿ! ನೀನು ಹೋಗಿ
ದೇವರ ರಾಜ್ಯದ ಬಗ್ಗೆ ತಿಳಿಸು'' ಎಂದು ಹೇಳಿದನು.
61 ಮತ್ತೊಬ್ಬನು, ''ಸ್ವಾಮೀ, ನಾನು ನಿನ್ನನ್ನು ಹಿಂಬಾ
ಲಿಸುವೆನು. ಆದರೆ ಮೊದಲು ನನ್ನ ಕುಟುಂಬದವರ ಬಳಿಗೆ
ಹೋಗಿ ಬರಲು ಅವಕಾಶ ನೀಡು'' ಎಂದು ಹೇಳಿದನು.
62 ಯೇಸು, ''ನೇಗಿಲಿನ ಮೇಲೆ ಕೈಯನ್ನು ಹಾಕಿ ಹಿಂತಿರುಗಿ
ನೋಡುವವನು ದೇವರ ರಾಜ್ಯಕ್ಕೆ ತಕ್ಕವನಲ್ಲ'' ಅಂದನು.

### ಸುವಾರ್ತಾಸೇವೆಗೆ ಹೊರಟ ಎಪ್ಪತ್ತೆರಡು ಮಂದಿ

10 ಇದಾದನಂತರ, ಯೇಸು ಇನ್ನೂ ಎಪ್ಪತ್ತೆರಡು *
ಮಂದಿಯನ್ನು ಆರಿಸಿಕೊಂಡು ತಾನು ಹೋಗ
ಬೇಕೆಂದು ಯೋಚಿಸಿದ ಪ್ರತಿಯೊಂದು ಪಟ್ಟಣಕ್ಕೂ ಸ್ಥಳಕ್ಕೂ
ಅವರನ್ನು ಇಬ್ಬಿಬ್ಬರನ್ನಾಗಿ ಮುಂಚಿತವಾಗಿ ಕಳುಹಿಸಿದನು.

---

**ವಚನ 54** ಕೆಲವು ಗ್ರೀಕ್ ಪ್ರತಿಗಳಲ್ಲಿ ''ಎಲೀಯನು ಮಾಡಿದಂತೆ'' ಎಂದು ಸೇರಿಸಲಾಗಿದೆ.

**ವಚನ 55** ಕೆಲವು ಗ್ರೀಕ್ ಪ್ರತಿಗಳಲ್ಲಿ ಇದನ್ನು ಸೇರಿಸಲಾಗಿದೆ; ಯೇಸುವು ಅವರಿಗೆ, ''ನೀವು ಎಂಥಾ ಸ್ವಭಾವಿಗಳೆಂದು ನಿಮಗೇ ತಿಳಿಯದು. 56 ಮನುಷ್ಯಕುಮಾರನು ಬಂದದ್ದು ಮಾನವರ ಆತ್ಮಗಳನ್ನು ನಾಶಮಾಡುವುದಕ್ಕಾಗಿಯಲ್ಲ, ರಕ್ಷಿಸುವುದಕ್ಕಾಗಿಯಷ್ಟೇ.'''

**ಎಪ್ಪತ್ತೆರಡು** ಲೂಕನ ಸುವಾರ್ತೆಯ ಕೆಲವು ಗ್ರೀಕ್ ಪ್ರತಿಗಳಲ್ಲಿ ಎಪ್ಪತ್ತು ಎಂದು ಬರೆದಿದೆ.

2ಯೇಸು ಅವರಿಗೆ, ‘‘ಬೆಳೆಯು ಬಹಳ, ಆದರೆ ಕೆಲಸಗಾರರು ಕೆಲವರೇ. ದೇವರೇ ಬೆಳೆಗೆ (ಜನರ) ಯಜಮಾನನು. ಬೆಳೆಯನ್ನು ಒಟ್ಟುಗೂಡಿಸುವುದಕ್ಕಾಗಿ ಹೆಚ್ಚು ಕೆಲಸಗಾರರನ್ನು ಕಳುಹಿಸಿಕೊಡುವಂತೆ ಯಜಮಾನನನ್ನು ಬೇಡಿಕೊಳ್ಳಿರಿ. 3ಈಗ ನೀವು ಹೋಗಬಹುದು. ಆದರೆ ನನ್ನ ಈ ಮಾತನ್ನು ಕೇಳಿರಿ! ತೋಳಗಳ ಮಧ್ಯೆ ಕುರಿಗಳನ್ನು ಕಳುಹಿಸುವಂತೆ ನಾನು ನಿಮ್ಮನ್ನು ಕಳುಹಿಸುತ್ತಿದ್ದೇನೆ. 4ಕೈಚೀಲವನ್ನಾಗಲಿ ಹಣವನ್ನಾಗಲಿ ಅಥವಾ ಪಾದರಕ್ಷೆಗಳನ್ನಾಗಲಿ ತೆಗೆದುಕೊಂಡು ಹೋಗಬೇಡಿರಿ. ದಾರಿಯಲ್ಲಿ ನಿಂತುಕೊಂಡು ಜನರೊಡನೆ ಮಾತನಾಡಬೇಡಿ. 5ನೀವು ಮನೆಯೊಳಗೆ ಹೋಗುವ ಮೊದಲು, ‘ನಿಮಗೆ ಶುಭವಾಗಲಿ’ ಎಂದು ಹೇಳಿರಿ.

6ಆ ಮನೆಯಲ್ಲಿ ಶಾಂತ ಸ್ವಭಾವದ ಮನುಷ್ಯನಿದ್ದರೆ, ನಿಮ್ಮ ಆಶೀರ್ವಾದ ಅವನಿಗೆ ದೊರೆಯುವುದು. ಅವನು ಶಾಂತ ಸ್ವಭಾವದವನಾಗಿಲ್ಲದಿದ್ದರೆ ನಿಮ್ಮ ಆಶೀರ್ವಾದ ನಿಮಗೇ ಹಿಂತಿರುಗಿ ಬರುವುದು. 7ಆ ಮನೆಯಲ್ಲಿ ಇಳಿದುಕೊಂಡು ಅವರು ಕೊಡುವುದನ್ನು ತಿನ್ನಿರಿ, ಕುಡಿಯಿರಿ. ಕೆಲಸಗಾರನು ಸಂಬಳಕ್ಕೆ ಯೋಗ್ಯನಾಗಿದ್ದಾನೆ. ಆದ್ದರಿಂದ ಇಳಿದುಕೊಳ್ಳುವುದಕ್ಕಾಗಿ ಆ ಮನೆಯನ್ನು ಬಿಟ್ಟು ಇನ್ನೊಂದು ಮನೆಗೆ ಹೋಗಬೇಡಿರಿ. 8ನೀವು ಒಂದು ಊರಿಗೆ ಹೋದಾಗ ಆ ಊರಿನ ಜನರು ನಿಮ್ಮನ್ನು ಸ್ವಾಗತಿಸಿದರೆ, ಅವರು ಕೊಡುವ ಆಹಾರವನ್ನು ಊಟಮಾಡಿರಿ. 9ಅಲ್ಲಿಯ ರೋಗಿಗಳನ್ನು ವಾಸಿಮಾಡಿರಿ. ಅಲ್ಲಿಯ ಜನರಿಗೆ, ‘ದೇವರ ರಾಜ್ಯವು ಸಮೀಪಿಸುತ್ತಿದೆ!’ ಎಂದು ತಿಳಿಸಿರಿ. 10ಆದರೆ ನೀವು ಒಂದು ಊರಿಗೆ ಹೋದಾಗ, ಅಲ್ಲಿಯ ಜನರು ನಿಮ್ಮನ್ನು ಸ್ವಾಗತಿಸದಿದ್ದರೆ, ನೀವು ಆ ಊರಿನ ಬೀದಿಗಳಿಗೆ ಹೋಗಿ, 11‘ನಮ್ಮ ಕಾಲುಗಳಿಗೆ ಹತ್ತಿದ ನಿಮ್ಮ ಊರಿನ ಧೂಳನ್ನು ನಿಮಗೆ ವಿರುದ್ಧವಾಗಿ ಝಾಡಿಸಿಬಿಡುತ್ತೇವೆ. ದೇವರ ರಾಜ್ಯ ಸಮೀಪಿಸುತ್ತಿದೆ ಎಂಬುದು ನಿಮಗೆ ತಿಳಿದಿರಲಿ’ ಎಂದು ಹೇಳಿರಿ. 12ನ್ಯಾಯತೀರ್ಪಿನ ದಿನದಲ್ಲಿ ಆ ಜನರ ಗತಿಯು ಸೊದೋಮಿನ* ಜನರ ಗತಿಗಿಂತಲೂ ಕಠಿಣವಾಗಿರುವುದು’’ ಎಂದು ಹೇಳಿದನು.

### ನಂಬಲೊಲ್ಲದ ಜನರಿಗೆ ಯೇಸುವಿನ ಎಚ್ಚರಿಕೆ

(ಮತ್ತಾಯ 11:20-24)

13‘‘ಕೊರಾಜಿನೇ, ಬೆತ್ಸಾಯಿದವೇ,* ನಿಮ್ಮ ಗತಿಯನ್ನು ಏನು ಹೇಳಲಿ! ನಿಮ್ಮಲ್ಲಿ ನಾನು ಅನೇಕ ಸೂಚಕ ಕಾರ್ಯಗಳನ್ನು ಮಾಡಿದೆನು. ಅದೇ ಸೂಚಕ ಕಾರ್ಯಗಳು ಟೈರ್ ಮತ್ತು ಸಿದೋನ್ ಪಟ್ಟಣಗಳಲ್ಲಿ ನಡೆದಿದ್ದರೆ, ಅವುಗಳ ಜನರು ಬಹಳ ಹಿಂದೆಯೇ, ತಮ್ಮ ಜೀವಿತಗಳನ್ನು ಮಾರ್ಪಡಿಸಿಕೊಂಡು, ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ಗೋಣಿತಟ್ಟನ್ನು ಧರಿಸಿಕೊಂಡು ಬೂದಿಯನ್ನು ಬಳಿದುಕೊಳ್ಳುತ್ತಿದ್ದರು. 14ಆದರೆ ನ್ಯಾಯತೀರ್ಪಿನ ದಿನದಲ್ಲಿ ನಿನ್ನ ಸ್ಥಿತಿಯು ಟೈರ್ ಮತ್ತು ಸಿದೋನ್‌ಗಳ ಸ್ಥಿತಿಗಿಂತಲೂ ಕಠಿಣವಾಗಿರುವುದು. 15ಕಪೆರ್ನೌಮೇ,* ನೀನು ಪರಲೋಕಕ್ಕೆ ಏರಿಸಲ್ಪಡುವಿಯೊ? ಇಲ್ಲ! ನೀನು ಪಾತಾಳಕ್ಕೆ ಇಳಿಯುವೆ!

16‘‘ನಿಮ್ಮ ಮಾತನ್ನು ಕೇಳುವವನು ನನ್ನ ಮಾತನ್ನೇ ಕೇಳುವವನಾಗಿದ್ದಾನೆ. ನಿಮ್ಮನ್ನು ಅಂಗೀಕರಿಸದವನು ನನ್ನನ್ನೇ ಅಂಗೀಕರಿಸದವನಾಗಿದ್ದಾನೆ. ನನ್ನನ್ನು ನಿರಾಕರಿಸುವವನು ನನ್ನನ್ನು ಕಳುಹಿಸಿದಾತನನ್ನೇ (ದೇವರು) ನಿರಾಕರಿಸುವವನಾಗಿದ್ದಾನೆ’’ ಎಂದು ಹೇಳಿದನು.

### ಸೈತಾನನ ಬೀಳುವಿಕೆ

17ಎಪ್ಪತ್ತೆರಡು ಮಂದಿ ಶಿಷ್ಯರು ತಮ್ಮ ಪ್ರವಾಸದಿಂದ ಹಿಂತಿರುಗಿ ಬಂದಾಗ ಬಹಳ ಸಂತೋಷವಾಗಿದ್ದರು. ಅವರು ಯೇಸುವಿಗೆ, ‘‘ಪ್ರಭುವೇ, ನಾವು ನಿನ್ನ ಹೆಸರನ್ನು ಹೇಳಿದಾಗ ದೆವ್ವಗಳು ಸಹ ನಮಗೆ ವಿಧೇಯವಾದವು!’’ ಎಂದು ಹೇಳಿದರು. 18ಯೇಸು ಅವರಿಗೆ, ‘‘ಸೈತಾನನು ಮಿಂಚಿನೋಪಾದಿಯಲ್ಲಿ ಆಕಾಶದಿಂದ ಕೆಳಗೆ ಬೀಳುವುದನ್ನು ನಾನು ನೋಡಿದೆನು. 19ಕೇಳಿರಿ! ಹಾವುಗಳ ಮತ್ತು ಚೇಳುಗಳ ಮೇಲೆ ನಡೆಯುವುದಕ್ಕೆ ನಿಮಗೆ ಅಧಿಕಾರ ಕೊಟ್ಟಿದ್ದೇನೆ. ವೈರಿಗಿರುವ ಅಧಿಕಾರಕ್ಕಿಂತಲೂ (ಸೈತಾನ) ಹೆಚ್ಚಿನ ಅಧಿಕಾರವನ್ನು ನಿಮಗೆ ಕೊಟ್ಟಿದ್ದೇನೆ. ಯಾವುದೂ ನಿಮಗೆ ಕೇಡು ಮಾಡುವುದಿಲ್ಲ. 20ಹೌದು, ದೆವ್ವಗಳೂ ನಿಮಗೆ ವಿಧೇಯವಾಗುತ್ತವೆ. ಈ ಅಧಿಕಾರ ನಿಮಗಿದೆ ಎಂಬುದರ ನಿಮಿತ್ತ ಸಂತೋಷಪಡದೆ ನಿಮ್ಮ ಹೆಸರುಗಳು ಪರಲೋಕದಲ್ಲಿ ಬರೆಯಲ್ಪಟ್ಟಿವೆ ಎಂಬುದಕ್ಕಾಗಿ ಸಂತೋಷಪಡಿರಿ’’ ಅಂದನು.

### ಯೇಸು ತಂದೆಗೆ ಮಾಡಿದ ಪ್ರಾರ್ಥನೆ

(ಮತ್ತಾಯ 11:25-27; 13:16-17)

21ಬಳಿಕ ಯೇಸು ಪವಿತ್ರಾತ್ಮನ ಮೂಲಕ ಬಹಳ ಸಂತೋಷಗೊಂಡು ಹೀಗೆ ಪ್ರಾರ್ಥಿಸಿದನು: ‘‘ಪರಲೋಕ ಭೂಲೋಕಗಳ ಪ್ರಭುವಾದ ತಂದೆಯೇ, ನಾನು ನಿನ್ನನ್ನು ಸ್ತುತಿಸುತ್ತೇನೆ. ನೀನು ಜ್ಞಾನಿಗಳಿಗೂ ಬುದ್ಧಿವಂತರಿಗೂ ಈ ಸಂಗತಿಗಳನ್ನು ಮರೆಮಾಡಿದ್ದಕ್ಕಾಗಿ ನಾನು ನಿನ್ನನ್ನು ಸ್ತುತಿಸುತ್ತೇನೆ. ಆದರೆ ನೀನು ಚಿಕ್ಕಮಕ್ಕಳಂತಿರುವ ಜನರಿಗೆ ಈ ಸಂಗತಿಗಳನ್ನು ಪ್ರಕಟಮಾಡಿದೆ. ಹೌದು, ತಂದೆಯೇ, ಅದೇ ನಿನ್ನ ಅಪೇಕ್ಷೆಯಾಗಿತ್ತು.

22‘‘ನನ್ನ ತಂದೆಯು ಎಲ್ಲವನ್ನೂ ನನಗೆ ಕೊಟ್ಟಿದ್ದಾನೆ. ಮಗನು ಯಾರೆಂಬುದು ಯಾರಿಗೂ ಗೊತ್ತಿಲ್ಲ. ತಂದೆಯೊಬ್ಬನಿಗೇ ಗೊತ್ತಿದೆ. ತಂದೆಯು ಯಾರೆಂಬುದು ಮಗನಿಗೆ ಮಾತ್ರ ಗೊತ್ತಿದೆ. ಮಗನು ತಂದೆಯ ಬಗ್ಗೆ ಯಾರಿಗೆ ತಿಳಿಸುತ್ತಾನೋ ಅವರು ಮಾತ್ರ ತಂದೆಯ ಬಗ್ಗೆ ತಿಳಿದುಕೊಳ್ಳುವರು.’’

23ಬಳಿಕ ಯೇಸು ತನ್ನ ಶಿಷ್ಯರ ಕಡೆಗೆ ತಿರುಗಿ ನೋಡಿದನು. ಅಲ್ಲಿ ಆತನ ಶಿಷ್ಯರು ಮಾತ್ರವಿದ್ದರು. ಯೇಸು ಅವರಿಗೆ, ‘‘ಈಗ ನಡೆಯುವ ಸಂಗತಿಗಳನ್ನು ನೋಡುತ್ತಿರುವ ನೀವು ಧನ್ಯರು! 24ಅನೇಕ ಪ್ರವಾದಿಗಳೂ ಅರಸರೂ ಈಗ ನೀವು ನೋಡುತ್ತಿರುವ ಈ ಸಂಗತಿಗಳನ್ನು ನೋಡಬೇಕೆಂದು ಮತ್ತು ಈಗ ನೀವು

---

**ಸೊದೋಮ್** ಬಹಳ ಕೆಟ್ಟ ಜನರು ವಾಸಿಸಿದ್ದ ಪಟ್ಟಣ. ದೇವರು ಅವರ ಪಟ್ಟಣವನ್ನು ನಾಶಮಾಡುವುದರ ಮೂಲಕ ಅವರನ್ನು ದಂಡಿಸಿದನು.

**ಕೊರಾಜಿನ್, ಬೆತ್ಸಾಯಿದ** ಗಲಿಲೇಯ ಸರೋವರದ ಬಳಿ ಇದ್ದ ಪಟ್ಟಣಗಳು. ಯೇಸು ಇಲ್ಲಿ ಜನರಿಗೆ ಬೋಧಿಸಿದನು.

**ಕಪೆರ್ನೌಮ್** ಗಲಿಲೇಯ ಪ್ರಾಂತ್ಯದ ಒಂದು ಊರು. ಯೇಸು ಇಲ್ಲಿ ಜನರಿಗೆ ಬೋಧಿಸಿದನು.

ಕೇಳುತ್ತಿರುವ ಸಂಗತಿಗಳನ್ನು ಕೇಳಬೇಕೆಂದು ಅಪೇಕ್ಷಿಸಿದರು.
ಆದರೆ ಅವರಿಗೆ ಸಾಧ್ಯವಾಗಲಿಲ್ಲ'' ಅಂದನು.

### ಒಳ್ಳೆಯ ಸಮಾರ್ಯದವನ ಸಾಮ್ಯ

25ಆಗ ಧರ್ಮೋಪದೇಶಕನೊಬ್ಬನು ಯೇಸುವನ್ನು
ಪರೀಕ್ಷಿಸಲು ಎದ್ದು ನಿಂತು, ''ಬೋಧಕನೇ, ನಾನು ನಿತ್ಯಜೀವ
ಹೊಂದಲು ಏನು ಮಾಡಬೇಕು?'' ಎಂದು ಕೇಳಿದನು.
26ಯೇಸು ಅವನಿಗೆ, ''ಧರ್ಮಶಾಸ್ತ್ರದಲ್ಲಿ ಇದರ ಕುರಿತು
ಏನು ಬರೆದಿದೆ? ಎಂದು ಕೇಳಿದನು.
27ಅದಕ್ಕೆ ಅವನು, '''ನೀನು ನಿನ್ನ ಪ್ರಭುವಾದ ದೇವರನ್ನು
ಪೂರ್ಣ ಹೃದಯದಿಂದ, ಪೂರ್ಣ ಪ್ರಾಣದಿಂದ, ಪೂರ್ಣ
ಶಕ್ತಿಯಿಂದ ಮತ್ತು ಪೂರ್ಣ ಮನಸ್ಸಿನಿಂದ ಪ್ರೀತಿಸಬೇಕು'*
ಮತ್ತು 'ನೀನು ನಿನ್ನನ್ನು ಪ್ರೀತಿಸುವಂತೆ ನಿನ್ನ ನೆರೆಯವರನ್ನು
ಪ್ರೀತಿಸಬೇಕು * ''' ಎಂದು ಬರೆದಿದೆ ಎಂಬುದಾಗಿ ಹೇಳಿದನು.
28ಯೇಸು, ''ನಿನ್ನ ಉತ್ತರ ಸರಿಯಾಗಿದೆ. ನೀನು ಹಾಗೆಯೇ
ಮಾಡು. ಆಗ ನಿನಗೆ ನಿತ್ಯಜೀವ ದೊರೆಯುವುದು'' ಅಂದನು.
29ಆದರೆ ಆ ಮನುಷ್ಯನು ತನ್ನನ್ನು ನೀತಿವಂತನೆಂದು
ತೋರಿಸಿಕೊಳ್ಳಲು ಬಯಸಿ, ಯೇಸುವಿಗೆ, ''ನಾನು ಪ್ರೀತಿಸ
ಬೇಕಾದ ನೆರೆಯವರು ಯಾರು?'' ಎಂದು ಕೇಳಿದನು.
30ಆಗ ಯೇಸು ಅವನಿಗೆ ಹೇಳಿದ್ದೇನೆಂದರೆ: ''ಒಬ್ಬ
ಮನುಷ್ಯನು ಜೆರುಸಲೇಮಿನಿಂದ ಇಳಿದು ಜೆರಿಕೋವಿಗೆ
ದಾರಿಯಲ್ಲಿ ಹೋಗುತ್ತಿದ್ದನು. ಕೆಲವು ದರೋಡೆಗಾರರು
ಅವನನ್ನು ಸುತ್ತುಗಟ್ಟಿದರು. ಅವರು ಅವನ ಬಟ್ಟೆಯನ್ನು
ಹರಿದುಹಾಕಿ ಅವನನ್ನು ಹೊಡೆದರು. ಅವನು ಮೇಲೇಳಲಾರದೆ
ನೆಲದ ಮೇಲೆ ಬಿದ್ದುಕೊಂಡನು. ದರೋಡೆಗಾರರು ಅವನನ್ನು
ನೆಲದ ಮೇಲೆಯೇ ಬಿಟ್ಟುಹೋದರು. ಅವನು ಸಾಯುವ
ಸ್ಥಿತಿಯಲ್ಲಿದ್ದನು. 31ಅದೇ ಸಮಯದಲ್ಲಿ ಯೆಹೂದ್ಯ
ಯಾಜಕನು ಆ ದಾರಿಯಲ್ಲಿ ಹೋಗುತ್ತಿದ್ದನು. ಯಾಜಕನು ಆ
ಮನುಷ್ಯನನ್ನು ನೋಡಿದರೂ ಅವನಿಗೆ ಸಹಾಯಮಾಡದೆ, ತನ್ನ
ಪ್ರಯಾಣವನ್ನು ಮುಂದುವರಿಸಿದನು. 32ನಂತರ, ಒಬ್ಬ
ಲೇವಿಯು ಅದೇ ದಾರಿಯಲ್ಲಿ ಹೋಗುತ್ತಾ ಅವನ ಹತ್ತಿರ
ಬಂದನು. ಲೇವಿಯು ಗಾಯಗೊಂಡಿದ್ದ ಮನುಷ್ಯನನ್ನು
ನೋಡಿದರೂ ಅವನಿಗೆ ಸಹಾಯ ಮಾಡದೆ ತನ್ನ ಪ್ರಯಾಣವನ್ನು
ಮುಂದುವರಿಸಿದನು. 33ಬಳಿಕ ಒಬ್ಬ ಸಮಾರ್ಯದವನು ಆ
ದಾರಿಯಲ್ಲಿ ಪ್ರಯಾಣ ಮಾಡುತ್ತಾ ಆ ಸ್ಥಳಕ್ಕೆ ಬಂದನು. ಅವನು
ಗಾಯಗೊಂಡಿದ್ದ ಮತ್ತು ದಾರಿಯಲ್ಲಿ ಬಿದ್ದುಕೊಂಡಿದ್ದ
ಮನುಷ್ಯನನ್ನು ನೋಡಿ ಬಹಳ ಮರುಕಗೊಂಡನು.
34ಸಮಾರ್ಯದವನು ಅವನ ಬಳಿಗೆ ಹೋಗಿ ಅವನ ಗಾಯ
ಗಳಿಗೆ ಆಲಿವ್ ಎಣ್ಣೆಯನ್ನೂ ದ್ರಾಕ್ಷಾರಸವನ್ನೂ ಹಚ್ಚಿ ಬಟ್ಟೆ
ಯಿಂದ ಕಟ್ಟಿದನು. ಸಮಾರ್ಯದವನು ಒಂದು ಕತ್ತೆಯ ಮೇಲೆ
ಪ್ರಯಾಣ ಮಾಡುತ್ತಾ ಅಲ್ಲಿಗೆ ಬಂದಿದ್ದನು. ಗಾಯಗೊಂಡಿದ್ದ
ಆ ಮನುಷ್ಯನನ್ನು ಅವನು ತನ್ನ ಕತ್ತೆಯ ಮೇಲೆ ಕುಳ್ಳಿರಿಸಿ, ಛತ್ರಕ್ಕೆ
ಕರೆದುಕೊಂಡು ಹೋಗಿ, ಅವನನ್ನು ಆರೈಕೆ ಮಾಡಿದನು.
35ಮರುದಿನ, ಸಮಾರ್ಯದವನು ಎರಡು ಬೆಳ್ಳಿ ನಾಣ್ಯಗಳನ್ನು
ಆ ಛತ್ರದವನಿಗೆ ಕೊಟ್ಟು, 'ಗಾಯಗೊಂಡ ಇವನನ್ನು ಆರೈಕೆ
ಮಾಡು. ಇದಕ್ಕಿಂತ ಹೆಚ್ಚಾಗಿ ಖರ್ಚಾದರೆ ನಾನು ಮತ್ತೆ ಬಂದಾಗ
ನಿನಗೆ ಕೊಡುತ್ತೇನೆ' ಎಂದು ಹೇಳಿದನು.''
36ಯೇಸು ಅವನಿಗೆ, ''ಈ ಮೂವರಲ್ಲಿ (ಯಾಜಕ, ಲೇವಿ
ಮತ್ತು ಸಮಾರ್ಯದವನು) ಯಾವನು ದರೋಡೆಗಾರರಿಂದ
ಗಾಯಗೊಂಡಿದ್ದ ಮನುಷ್ಯನಿಗೆ ಪ್ರೀತಿ ತೋರಿಸಿದನು?''
ಎಂದು ಕೇಳಿದನು.
37ಧರ್ಮೋಪದೇಶಕನು, ''ಅವನಿಗೆ ಸಹಾಯ ಮಾಡಿ
ದವನೇ'' ಎಂದು ಉತ್ತರಿಸಿದನು. ಆಗ ಯೇಸು ಅವನಿಗೆ
''ಹಾಗಾದರೆ, ನೀನು ಹೋಗಿ ನೆರೆಯವರಿಗೆ* ಹಾಗೆಯೇ
ಮಾಡು!'' ಅಂದನು.

### ಮರಿಯಳು ಮತ್ತು ಮಾರ್ಥಳು

38ಯೇಸು ಮತ್ತು ಆತನ ಶಿಷ್ಯರು ಪ್ರಯಾಣ ಮಾಡುತ್ತಾ
ಒಂದು ಊರಿಗೆ ಬಂದರು. ಮಾರ್ಥಳೆಂಬ ಸ್ತ್ರೀ ಯೇಸುವನ್ನು
ತನ್ನ ಮನೆಗೆ ಆಮಂತ್ರಿಸಿದಳು. 39ಆಕೆಗೆ ಮರಿಯಳೆಂಬ ತಂಗಿ
ಇದ್ದಳು. ಮರಿಯಳು ಯೇಸುವಿನ ಪಾದಗಳ ಬಳಿ ಕುಳಿತು
ಕೊಂಡು ಆತನ ಉಪದೇಶವನ್ನು ಕೇಳುತ್ತಿದ್ದಳು. ಆದರೆ ಆಕೆಯ
ಸಹೋದರಿಯಾದ ಮಾರ್ಥಳು ಅತಿಥಿಸತ್ಕಾರ ಮಾಡುತ್ತಿದ್ದಳು.
40ಮನೆಯಲ್ಲಿ ಬಹಳ ಕೆಲಸವಿದ್ದುದರಿಂದ ಮಾರ್ಥಳು ಕೋಪ
ಗೊಂಡು ಯೇಸುವಿನ ಬಳಿಗೆ ಬಂದು, ''ಪ್ರಭುವೇ, ನನ್ನ
ತಂಗಿಯು ಮನೆಯ ಕೆಲಸವನ್ನೆಲ್ಲಾ ನನಗೇ ಬಿಟ್ಟು ಬಂದಿದ್ದಾಳೆ.
ಇದರ ಬಗ್ಗೆ ನಿನಗೆ ಚಿಂತೆಯಿಲ್ಲವೋ? ನನಗೆ ಸಹಾಯ
ಮಾಡಲು ಆಕೆಗೆ ಹೇಳು?'' ಅಂದಳು.
41ಆದರೆ ಪ್ರಭುವು ಅವಳಿಗೆ, ''ಮಾರ್ಥಾ, ಮಾರ್ಥಾ,
ನೀನು ಅನೇಕ ಕೆಲಸಗಳ ಬಗ್ಗೆ ಚಿಂತಿಸುತ್ತಾ ಗಲಿಬಿಲಿ
ಯಾಗಿರುವೆ. 42ಒಂದೇ ಒಂದು ಮುಖ್ಯವಾದದ್ದು. ಮರಿಯಳು
ಮಾಡಿದ ಆಯ್ಕೆ ಸರಿಯಾದದ್ದು. ಆಕೆಯಿಂದ ಅದು ಎಂದಿಗೂ
ತೆಗೆಯಲ್ಪಡುವುದಿಲ್ಲ'' ಎಂದನು.

### ಪ್ರಾರ್ಥನೆಯ ಕುರಿತು ಯೇಸುವಿನ ಉಪದೇಶ

(ಮತ್ತಾಯ 6:9-15, 7:7-11)

11 ಒಮ್ಮೆ ಯೇಸು ಒಂದು ಸ್ಥಳದಲ್ಲಿ ಪ್ರಾರ್ಥಿಸುತ್ತಿದ್ದನು.
ಯೇಸು ಪ್ರಾರ್ಥನೆ ಮಾಡಿ ಮುಗಿಸಿದಾಗ, ಆತನ
ಶಿಷ್ಯರಲ್ಲೊಬ್ಬನು, ''ಪ್ರಭುವೇ, ಯೋಹಾನನು ತನ್ನ ಶಿಷ್ಯರಿಗೆ
ಪ್ರಾರ್ಥಿಸುವ ವಿಧಾನವನ್ನು ಕಲಿಸಿದಂತೆ, ದಯಮಾಡಿ ನಮಗೂ
ಪ್ರಾರ್ಥಿಸುವ ವಿಧಾನವನ್ನು ಹೇಳಿಕೊಡು'' ಎಂದನು.
2ಯೇಸು ಅವರಿಗೆ ಇಂತೆಂದನು: ''ನೀವು ಹೀಗೆ
ಪ್ರಾರ್ಥಿಸಿರಿ:

'ತಂದೆಯೇ ನಿನ್ನ ನಾಮವು ಯಾವಾಗಲೂ
ಪರಿಶುದ್ಧವಾಗಿರಲಿ.* ನಿನ್ನ ರಾಜ್ಯವು ಬರಲಿ.
3 ನಮ್ಮ ಅನುದಿನ ಆಹಾರವನ್ನು ನಮಗೆ
ದಯಪಾಲಿಸು.

---

**ನೀನು ... ಪ್ರೀತಿಸಬೇಕು** ಧರ್ಮೋಪದೇಶ. 6:5

**ನೀನು ... ಪ್ರೀತಿಸಬೇಕು** ಯಾಜಕಕಾಂಡ 19:18.

**ನೆರೆಯವರಿಗೆ** ಇತರ ಜನರಿಂದ ಸಹಾಯದ ಅಗತ್ಯವಿರುವವರು.

**ಪರಿಶುದ್ಧ** ಎಂದರೆ ಸನ್ಮಾನಿಸಲ್ಪಡಲಿ.

4 ನಮಗೆ ತಪ್ಪು ಮಾಡಿದವರನ್ನು ನಾವು ಕ್ಷಮಿಸುವಂತೆ ನಮ್ಮ ಪಾಪಗಳನ್ನೂ ಕ್ಷಮಿಸು. ನಮ್ಮನ್ನು ಶೋಧನೆಗೆ ಒಳಪಡಿಸಬೇಡ.''

## ಎಡಬಿಡದೆ ಪ್ರಾರ್ಥಿಸಿ

5-6 ಆಗ ಯೇಸು ಅವರಿಗೆ, ''ನಿಮ್ಮಲ್ಲಿ ಒಬ್ಬನು ತನ್ನ ಸ್ನೇಹಿತನೊಬ್ಬನ ಮನೆಗೆ ರಾತ್ರಿ ಬಹಳ ತಡವಾಗಿ ಹೋಗಿದ್ದಾನೆ ಎಂದು ಭಾವಿಸಿಕೊಳ್ಳೋಣ. ಅವನು ತನ್ನ ಸ್ನೇಹಿತನಿಗೆ, 'ನನ್ನ ಗೆಳೆಯನೊಬ್ಬನು ನನ್ನನ್ನು ನೋಡಲು ದೂರದಿಂದ ನಮ್ಮ ಮನೆಗೆ ಬಂದಿದ್ದಾನೆ. ಆದರೆ ಅವನಿಗೆ ಊಟಕ್ಕೆ ಕೊಡಲು ನನ್ನಲ್ಲಿ ಏನೂ ಇಲ್ಲ. ದಯಮಾಡಿ ನನಗೆ ಮೂರು ರೊಟ್ಟಿಗಳನ್ನು ಕೊಡು' ಎಂದು ಕೇಳುತ್ತಾನೆ. 7 ಮನೆಯೊಳಗಿರುವ ಸ್ನೇಹಿತನು, 'ಹೊರಟುಹೋಗು! ನನಗೆ ತೊಂದರೆ ಕೊಡಬೇಡ! ಬಾಗಿಲು ಮುಚ್ಚಿದೆ! ನಾನು ಮತ್ತು ನನ್ನ ಮಕ್ಕಳು ಮಲಗಿದ್ದೇವೆ. ಈಗ ಎದ್ದು ನಿನಗೆ ರೊಟ್ಟಿ ಕೊಡಲಾರೆ' ಎಂದು ಉತ್ತರ ಕೊಡುತ್ತಾನೆ. 8 ಕೇವಲ ಸ್ನೇಹವೊಂದೇ ಅವನನ್ನು ಏಳಿಸಿ ರೊಟ್ಟಿ ಕೊಡುವಂತೆ ಮಾಡಲಾರದೆಂದು ನಾನು ನಿಮಗೆ ಹೇಳುತ್ತೇನೆ. ಆದರೆ ಅವನು ಎಡಬಿಡದೆ ಕೇಳುತ್ತಲೇ ಇದ್ದರೆ, ಅವನು ಎದ್ದು ತನ್ನ ಸ್ನೇಹಿತನಿಗೆ ಬೇಕಾಗಿರುವ ರೊಟ್ಟಿಯನ್ನು ಖಂಡಿತವಾಗಿ ಕೊಡುವನು. 9 ಆದ್ದರಿಂದ ನಾನು ನಿಮಗೆ ಹೇಳುವುದೇನೆಂದರೆ, ಬೇಡಿಕೊಳ್ಳಿರಿ. ನಿಮಗೆ ದೊರೆಯುವುದು. ಹುಡುಕಿರಿ, ಆಗ ನೀವು ಕಂಡುಕೊಳ್ಳುವಿರಿ. ತಟ್ಟಿರಿ, ಆಗ ನಿಮಗೆ ಬಾಗಿಲು ತೆರೆಯುವುದು. 10 ಹೌದು, ಎಡಬಿಡದೆ ಹುಡುಕುವವನು ಕಂಡುಕೊಳ್ಳುವನು. ಒಬ್ಬನು ಎಡಬಿಡದೆ ತಟ್ಟುತ್ತಿದ್ದರೆ, ಅವನಿಗೆ ಬಾಗಿಲು ತೆರೆಯಲ್ಪಡುವುದು. 11 ನಿಮ್ಮಲ್ಲಿ ಎಷ್ಟು ಜನರು ತಂದೆಗಳಾಗಿದ್ದೀರಿ? ನಿಮ್ಮ ಮಗನು ಮೀನನ್ನು ಕೇಳಿದರೆ, ನೀವು ಅವನಿಗೆ ಹಾವನ್ನು ಕೊಡುವಿರೋ? ಇಲ್ಲ! ನೀವು ಮೀನನ್ನೇ ಕೊಡುತ್ತೀರಿ. 12 ನಿಮ್ಮ ಮಗನು ಮೊಟ್ಟೆಯನ್ನು ಕೇಳಿದರೆ, ನೀವು ಅವನಿಗೆ ಚೇಳನ್ನು ಕೊಡುವಿರೋ? ಇಲ್ಲ! 13 ನೀವು ಇತರ ಜನರಂತೆ ಕೆಟ್ಟವರಾಗಿದ್ದೀರಿ. ಆದರೆ, ನಿಮ್ಮ ಮಕ್ಕಳಿಗೆ ಒಳ್ಳೆಯ ಪದಾರ್ಥಗಳನ್ನು ಕೊಡುತ್ತೀರಿ. ಅದೇ ರೀತಿಯಲ್ಲಿ ಪರಲೋಕದಲ್ಲಿರುವ ನಿಮ್ಮ ತಂದೆಯು ಸಹ ತನ್ನನ್ನು ಬೇಡಿಕೊಳ್ಳುವವರಿಗೆ ಪವಿತ್ರಾತ್ಮನನ್ನು ಖಂಡಿತವಾಗಿ ಕೊಡುತ್ತಾನೆ'' ಎಂದು ಹೇಳಿದನು.

## ಯೇಸುವಿನ ಶಕ್ತಿ ದೇವರಿಂದ ಬಂದದ್ದು

(ಮತ್ತಾಯ 12:22-30; ಮಾರ್ಕ 3:20-27)

14 ಒಮ್ಮೆ ಯೇಸು ಮೂಕದೆವ್ವದಿಂದ ಪೀಡಿತನಾಗಿದ್ದ ಒಬ್ಬನನ್ನು ಬಿಡಿಸುತ್ತಿದ್ದನು. ಆ ದೆವ್ವವು ಅವನನ್ನು ಬಿಟ್ಟು ಹೊರಗೆ ಬಂದಾಗ, ಅವನು ಮಾತಾಡಿದನು. ಇದನ್ನು ಕಂಡ ಜನರು ಬೆರಗಾದರು. 15 ಆದರೆ ಕೆಲವರು, ''ದೆವ್ವದಿಂದ ಪೀಡಿತರಾಗಿರುವವರನ್ನು ಇವನು ಬೆಲ್ಜೆಬೂಲನ ಶಕ್ತಿಯಿಂದ ಬಿಡಿಸುತ್ತಾನೆ. ಬೆಲ್ಜೆಬೂಲನು ದೆವ್ವಗಳ ಅಧಿಪತಿ'' ಎಂದು ಹೇಳಿದರು.

16 ಇತರ ಜನರು ಯೇಸುವನ್ನು ಪರೀಕ್ಷಿಸಬೇಕೆಂದು ದೇವರಿಂದ ಒಂದು ಸೂಚಕ ಕಾರ್ಯವನ್ನು ನಮಗೆ ತೋರಿಸು ಎಂದು ಕೇಳಿದರು. 17 ಆದರೆ ಅವರ ಆಲೋಚನೆಯನ್ನು ತಿಳಿದಿದ್ದ ಯೇಸು ಅವರಿಗೆ, ''ಒಡೆದುಹೋದ ಮತ್ತು ತನಗೆ ವಿರುದ್ಧವಾಗಿ ತಾನೇ ಕಾದಾಡುವ ರಾಜ್ಯವು ನಾಶವಾಗುವುದು. ಭೇದಭಾವದಿಂದ ಕೂಡಿರುವ ಕುಟುಂಬವು ಮುರಿದು ಹೋಗುವುದು. 18 ಅಂತೆಯೇ ಸೈತಾನನು ತನಗೆ ವಿರುದ್ಧವಾಗಿ ತಾನೇ ಕಾದಾಡಿದರೆ, ಅವನ ರಾಜ್ಯವು ಮುಂದುವರಿಯಲು ಹೇಗೆ ಸಾಧ್ಯ? ನಾನು ದೆವ್ವಗಳನ್ನು ಬೆಲ್ಜೆಬೂಲನ ಶಕ್ತಿಯಿಂದ ಬಿಡಿಸುತ್ತೇನೆಂದು ನೀವು ಹೇಳುತ್ತೀರಿ. 19 ನಾನು ಬೆಲ್ಜೆಬೂಲನ ಶಕ್ತಿಯಿಂದ ದೆವ್ವಗಳನ್ನು ಬಿಡಿಸುವುದಾಗಿದ್ದರೆ, ನಿಮ್ಮ ಜನರು ದೆವ್ವಗಳನ್ನು ಯಾವ ಶಕ್ತಿಯಿಂದ ಬಿಡಿಸುತ್ತಾರೆ? ಆದ್ದರಿಂದ ನಿಮ್ಮ ಸ್ವಂತ ಜನರೇ ನಿಮ್ಮನ್ನು ತಪ್ಪಿತಸ್ಥರೆಂದು ಹೇಳುತ್ತಾರೆ. 20 ಆದರೆ ನಾನು ದೆವ್ವಗಳನ್ನು ದೇವರ ಬಲದಿಂದ ಹೊರಡಿಸುವುದಾದರೆ ದೇವರ ರಾಜ್ಯವು ನಿಮ್ಮ ಬಳಿಗೆ ಬಂದಿದೆ! ಎಂಬುದಕ್ಕೆ ಇದೇ ಸಾಕ್ಷಿಯಾಗಿದೆ.

21 ''ಒಬ್ಬ ಬಲಿಷ್ಠನು ಅನೇಕ ಆಯುಧಗಳಿಂದ ಸುಸಜ್ಜಿತನಾಗಿ ತನ್ನ ಮನೆಯನ್ನು ಕಾಯುತ್ತಿರುವಾಗ, ಮನೆಯೊಳಗಿರುವ ವಸ್ತುಗಳು ಸುರಕ್ಷಿತವಾಗಿರುತ್ತವೆ. 22 ಆದರೆ ಅವನಿಗಿಂತಲೂ ಬಲಿಷ್ಠನಾದ ಮತ್ತೊಬ್ಬನು ಬಂದು ಅವನನ್ನು ಸೋಲಿಸಿದರೆ, ಮೊದಲನೆಯ ಬಲಿಷ್ಠನು ತನ್ನ ಮನೆಯನ್ನು ಸುರಕ್ಷಿತವಾಗಿಡುವುದಕ್ಕಾಗಿ ಅವಲಂಬಿಸಿಕೊಂಡಿದ್ದ ಆಯುಧಗಳನ್ನೆಲ್ಲಾ ಆ ಮತ್ತೊಬ್ಬ ಬಲಿಷ್ಠನು ತೆಗೆದುಕೊಂಡು ಹೋಗುವನು. ಬಳಿಕ ಆ ಮತ್ತೊಬ್ಬ ಬಲಿಷ್ಠನು ಆ ಮನುಷ್ಯನ ವಸ್ತುಗಳನ್ನು ತನಗೆ ಇಷ್ಟಬಂದ ಹಾಗೆ ಮಾಡುವನು.

23 ''ನನ್ನೊಂದಿಗಿಲ್ಲದವನು ನನಗೆ ವಿರೋಧವಾಗಿದ್ದಾನೆ. ನನ್ನೊಂದಿಗೆ ಶೇಖರಿಸದವನು ಚದರಿಸುವವನಾಗಿದ್ದಾನೆ.

## ಬರಿದಾದ ಹೃದಯ

(ಮತ್ತಾಯ 12:43-45)

24 ''ದೆವ್ವವು ಒಬ್ಬ ವ್ಯಕ್ತಿಯಿಂದ ಹೊರಗೆ ಬಂದ ಮೇಲೆ ವಿಶ್ರಾಂತಿಗಾಗಿ ಸ್ಥಳವನ್ನು ಹುಡುಕುತ್ತಾ ನೀರಿಲ್ಲದ ಸ್ಥಳಗಳಲ್ಲಿ ಅಲೆದಾಡುತ್ತದೆ. ಆದರೆ ವಿಶ್ರಮಿಸಿಕೊಳ್ಳಲು ಅದಕ್ಕೆ ಸ್ಥಳ ದೊರೆಯುವುದಿಲ್ಲ. ಆದ್ದರಿಂದ 'ನಾನು ಬಿಟ್ಟುಬಂದ ಮನೆಗೆ (ವ್ಯಕ್ತಿ) ಹಿಂತಿರುಗುವೆನು' ಎಂದುಕೊಳ್ಳುತ್ತದೆ. 25 ಅದು ಆ ವ್ಯಕ್ತಿಯ ಬಳಿಗೆ ಹಿಂತಿರುಗಿ ಬಂದಾಗ, ಆ ಮನೆಯನ್ನು (ವ್ಯಕ್ತಿ), ಗುಡಿಸಿ ಅಲಂಕರಿಸಿರುವುದನ್ನು ಕಾಣುತ್ತದೆ. 26 ಆಗ ಹೊರಟು ಹೋಗಿ ತನಗಿಂತಲೂ ಹೆಚ್ಚು ಕೆಟ್ಟವುಗಳಾದ ಬೇರೆ ಏಳು ದೆವ್ವಗಳನ್ನು ಕರೆದುಕೊಂಡು ಬರುತ್ತದೆ. ಬಳಿಕ ಆ ದೆವ್ವಗಳೆಲ್ಲಾ ಆ ಮನುಷ್ಯನೊಳಗೆ ಹೋಗಿ ಅಲ್ಲೇ ವಾಸಿಸುತ್ತವೆ. ಆಗ ಆ ವ್ಯಕ್ತಿಯು ಮೊದಲಿಗಿಂತಲೂ ಹೆಚ್ಚಿನ ಸಂಕಟಕ್ಕೆ ಒಳಗಾಗುತ್ತಾನೆ'' ಎಂದು ಹೇಳಿದನು.

## ನಿಜವಾದ ಭಾಗ್ಯವಂತರು

27 ಯೇಸು ಈ ಸಂಗತಿಗಳನ್ನು ಹೇಳಿದಾಗ, ಅಲ್ಲಿ, ಜನರೊಂದಿಗಿದ್ದ ಒಬ್ಬ ಸ್ತ್ರೀ ಯೇಸುವಿಗೆ, ''ನಿನ್ನನ್ನು ಹೆತ್ತು ಪೋಷಿಸಿದ ತಾಯಿ ಭಾಗ್ಯವಂತಳೇ ಸರಿ!'' ಎಂದು ಹೇಳಿದಳು.

28 ಆದರೆ ಯೇಸು, ''ದೇವರ ವಾಕ್ಯವನ್ನು ಕೇಳಿ ಅದಕ್ಕೆ ವಿಧೇಯರಾಗುವ ಜನರೇ, ಭಾಗ್ಯವಂತರು!''ಎಂದನು.

## ನಮಗೆ ಸಾಕ್ಷಿ ಕೊಡು!

(ಮತ್ತಾಯ 12:38-42; ಮಾರ್ಕ 8:12)

29 ಜನರ ಗುಂಪು ದೊಡ್ಡದಾಗುತ್ತಿರಲು ಯೇಸು ಅವರಿಗೆ, ''ಈ ಸಂತತಿಯು ಕೆಟ್ಟ ಸಂತತಿಯೇ ಸರಿ! ಇದು ಸೂಚಕ

ಕಾರ್ಯವನ್ನು ನೋಡಬೇಕೆನ್ನುತ್ತದೆ. ಆದರೆ ಯೋನನ
ಜೀವಿತದಲ್ಲಾದ ಸೂಚಕ ಕಾರ್ಯದ ಹೊರತು ಬೇರೆ
ಯಾವುದೂ ಇದಕ್ಕೆ ದೊರೆಯುವುದಿಲ್ಲ. 30ನಿನವೆಯಲ್ಲಿ
ಜೀವಿಸುತ್ತಿದ್ದ ಜನರಿಗೆ ಯೋನನು ಒಂದು ಸೂಚನೆ
ಯಾಗಿದ್ದನು. ಅದೇ ರೀತಿಯಲ್ಲಿ ಈ ಕಾಲದ ಜನರಿಗೆ
ಮನುಷ್ಯಕುಮಾರನು ಸೂಚನೆಯಾಗಿದ್ದಾನೆ. 31ನ್ಯಾಯ
ತೀರ್ಪಿನ ದಿನದಲ್ಲಿ ದಕ್ಷಿಣ ದೇಶದ ರಾಣಿಯು ಈ ಪೀಳಿಗೆ
ಯವರೊಂದಿಗೆ ಎದ್ದುನಿಂತು ಇವರನ್ನು ಅಪರಾಧಿಗಳೆಂದು
ಹೇಳುವಳು. ಏಕೆಂದರೆ, ಆ ರಾಣಿಯು ಬಹು ದೂರದಿಂದ
ಸೊಲೊಮೋನನ ಜ್ಞಾನಬೋಧನೆಯನ್ನು ಕೇಳಲು ಬಂದಳು.
ಆದರೆ ನಾನು ನಿಮಗೆ ಹೇಳುವುದೇನೆಂದರೆ, ನಾನು
ಸೊಲೊಮೋನನಿಗಿಂತಲೂ ಹೆಚ್ಚಿನವನಾಗಿದ್ದೇನೆ! 32ನ್ಯಾಯ
ತೀರ್ಪಿನ ದಿನದಲ್ಲಿ ನಿನವೆ ಪಟ್ಟಣದವರು ಈ ಸಂತತಿಗೆ
ಎದುರಾಗಿ ನಿಂತು ಇವರನ್ನು ಅಪರಾಧಿಗಳೆಂದು ತೋರಿಸು
ವರು. ಏಕೆಂದರೆ ಅವರು ಪ್ರವಾದಿ ಯೋನನ ಬೋಧನೆಯನ್ನು
ಕೇಳಿ ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ
ತಿರುಗಿಕೊಂಡರು. ಆದರೆ ನಾನು ಪ್ರವಾದಿ ಯೋನನಿಗಿಂತಲೂ
ಹೆಚ್ಚಿನವನಾಗಿದ್ದೇನೆ.

33“ದೀಪವನ್ನು ಹಚ್ಚಿ ಪಾತ್ರೆಯೊಳಗಾಗಲಿ ಬೇರೆ ಎಲ್ಲೇ
ಆಗಲಿ ಅಡಗಿಸಿಡುವುದಿಲ್ಲ. ಒಳಗೆ ಬರುವವರಿಗೆ ಬೆಳಕು
ಕಾಣಿಸಲೆಂದು ದೀಪವನ್ನು ದೀಪಸ್ತಂಭದ ಮೇಲೆ ಇಡುತ್ತಾರೆ.
34ನಿನ್ನ ಕಣ್ಣು ದೇಹಕ್ಕೆ ಬೆಳಕಾಗಿದೆ. ನಿನ್ನ ಕಣ್ಣು ಒಳ್ಳೆಯ
ದಾಗಿದ್ದರೆ, ನಿನ್ನ ದೇಹವೆಲ್ಲಾ ಪೂರ್ಣ ಬೆಳಕಾಗಿರುವುದು. ನಿನ್ನ
ಕಣ್ಣು ಕೆಟ್ಟದ್ದಾಗಿದ್ದರೆ, ನಿನ್ನ ದೇಹವೆಲ್ಲಾ ಪೂರ್ಣ ಕತ್ತಲಾಗಿರು
ವುದು.

35ಆದ್ದರಿಂದ ಎಚ್ಚರಿಕೆಯಾಗಿರು! ನಿನ್ನೊಳಗಿರುವ ಬೆಳಕು
ಕತ್ತಲಾಗದಂತೆ ನೋಡಿಕೊ. 36ನಿನ್ನ ದೇಹವೆಲ್ಲಾ ಬೆಳಕಿ ನಿಂದ
ತುಂಬಿದ್ದು ಯಾವ ಭಾಗದಲ್ಲಿಯೂ ಕತ್ತಲಿಲ್ಲದಿದ್ದರೆ, ನೀನು
ಪ್ರಜ್ವಲಿಸುವ ಬೆಳಕಿನಂತಿರುವೆ” ಎಂದು ಹೇಳಿದನು.

### ಯೇಸು ಫರಿಸಾಯರನ್ನು ಖಂಡಿಸಿದನು

(ಮತ್ತಾಯ 23:1-36; ಮಾರ್ಕ 12:38-40; ಲೂಕ 20:45-47)

37ಯೇಸು ಮಾತಾಡಿ ಮುಗಿಸಿದ ಮೇಲೆ ಫರಿಸಾಯ
ನೊಬ್ಬನು ಯೇಸುವನ್ನು ತನ್ನ ಮನೆಗೆ ಊಟಕ್ಕೆ ಬರಬೇಕೆಂದು
ಕರೆದನು. ಆದ್ದರಿಂದ ಯೇಸು ಅವನ ಮನೆಯೊಳಗೆ ಹೋಗಿ
ಊಟಕ್ಕೆ ಕುಳಿತುಕೊಂಡನು. 38ಆದರೆ ಯೇಸು ತನ್ನ ಕೈಗಳನ್ನು
ತೊಳೆದುಕೊಳ್ಳದೆ ಊಟಕ್ಕೆ ಕುಳಿತಿರುವುದನ್ನು ಕಂಡಾಗ
ಫರಿಸಾಯನಿಗೆ ಆಶ್ಚರ್ಯವಾಯಿತು. 39ಪ್ರಭುವು (ಯೇಸು)
ಅವನಿಗೆ ಹೇಳಿದ್ದೇನೆಂದರೆ: “ಫರಿಸಾಯರಾದ ನೀವು ಪಾತ್ರೆಯ
ಮತ್ತು ಬಟ್ಟಲಿನ ಹೊರ ಭಾಗವನ್ನು ಶುಚಿಮಾಡುತ್ತೀರಿ. ಆದರೆ
ನಿಮ್ಮ ಒಳಭಾಗವು ಮೋಸದಿಂದಲೂ ಕೆಟ್ಟತನದಿಂದಲೂ
ತುಂಬಿಹೋಗಿದೆ. 40ನೀವು ಬುದ್ಧಿಹೀನರು! ಹೊರಭಾಗವನ್ನು
ಮಾಡಿದಾತನೇ (ದೇವರು) ಒಳಭಾಗವನ್ನೂ ಮಾಡಿದ್ದಾನೆ.
41ಆದ್ದರಿಂದ ಈ ಪಾತ್ರೆ ಮತ್ತು ಬಟ್ಟಲುಗಳ ಒಳಗಿರುವುದನ್ನು
ಬಡವರಿಗೆ ದಾನಮಾಡಿರಿ. ಆಗ ನೀವು ಪೂರ್ಣ ಶುದ್ಧರಾಗು
ತ್ತೀರಿ. 42ಫರಿಸಾಯರೇ, ನಿಮ್ಮ ಗತಿಯನ್ನು ಏನು ಹೇಳಲಿ! ನೀವು
ದೇವರಿಗೆ ನಿಮ್ಮಲ್ಲಿರುವ ಪ್ರತಿಯೊಂದರಲ್ಲಿಯೂ ಹತ್ತನೆಯ
ಒಂದು ಭಾಗವನ್ನು ಕೊಡುತ್ತೀರಿ. ನಿಮ್ಮ ತೋಟದಲ್ಲಿ
ಬೆಳೆಯುವ ಮರುಗ, ಸದಾಪು ಮುಂತಾದ ಚಿಕ್ಕ ಸಸಿಗಳಲ್ಲಿಯೂ
ಹತ್ತನೆಯ ಒಂದು ಭಾಗವನ್ನು ಕೊಡುತ್ತೀರಿ. ಆದರೆ ಬೇರೆ
ಯವರಿಗೆ ನ್ಯಾಯತೋರಿಸುವುದನ್ನೂ ದೇವರನ್ನು ಪ್ರೀತಿಸು
ವುದನ್ನೂ ಮರೆತು ಬಿಟ್ಟಿದ್ದೀರಿ. ನೀವು ಮೊದಲು ಇವುಗಳನ್ನು
ಮಾಡಬೇಕು ಮತ್ತು ಉಳಿದವುಗಳನ್ನು ಕಡೆಗಣಿಸಬಾರದು.
43ಫರಿಸಾಯರೇ, ನಿಮ್ಮ ಗತಿಯನ್ನು ಏನು ಹೇಳಲಿ! ನೀವು
ಸಭಾಮಂದಿರಗಳಲ್ಲಿ ಉನ್ನತಪೀಠಗಳನ್ನೂ ಮಾರುಕಟ್ಟೆಗಳಲ್ಲಿ
ಜನರಿಂದ ಗೌರವವನ್ನೂ ಆಶಿಸುತ್ತೀರಿ. 44ನೀವು ಮರೆ
ಯಾಗಿರುವ ಸಮಾಧಿಗಳಂತಿದ್ದೀರಿ. ಜನರು ಸಮಾಧಿಗಳೆಂದು
ತಿಳಿಯದೆ ಅವುಗಳ ಮೇಲೆ ನಡೆಯುತ್ತಾರೆ.’

### ಧರ್ಮೋಪದೇಶಕನಿಗೆ ಯೇಸು ನೀಡಿದ ಉತ್ತರ

45ಧರ್ಮೋಪದೇಶಕನೊಬ್ಬನು ಯೇಸುವಿಗೆ, “ಬೋಧ
ಕನೇ, ನೀನು ಫರಿಸಾಯರ ಕುರಿತಾಗಿ ಈ ಸಂಗತಿಗಳನ್ನು
ಹೇಳಿದಾಗ ನಮ್ಮನ್ನು ಸಹ ಖಂಡಿಸಿದಂತಾಯಿತು” ಎಂದು
ಹೇಳಿದನು.

46ಅದಕ್ಕೆ ಯೇಸು, “ಧರ್ಮೋಪದೇಶಕರೇ, ನಿಮ್ಮ
ಗತಿಯನ್ನು ಏನು ಹೇಳಲಿ! ಜನರು ಅನುಸರಿಸಲಾಗದ
ನಿಯಮಗಳನ್ನು ನೀವು ಮಾಡುತ್ತೀರಿ.* ಆ ನಿಯಮಗಳಿಗೆ
ವಿಧೇಯರಾಗುವಂತೆ ಬೇರೆಯವರಿಗೆ ಬಲವಂತ ಮಾಡುತ್ತೀರಿ.
ಆದರೆ ಆ ನಿಯಮಗಳಲ್ಲಿ ಒಂದನ್ನಾದರೂ ಪಾಲಿಸಲು ನೀವು
ಪ್ರಯತ್ನಿಸುವುದಿಲ್ಲ. 47ನಿಮ್ಮ ಗತಿಯನ್ನು ಏನು ಹೇಳಲಿ! ನೀವು
ಪ್ರವಾದಿಗಳಿಗೆ ಗೋರಿಗಳನ್ನು* ಕಟ್ಟುತ್ತೀರಿ. ಆದರೆ ಆ
ಪ್ರವಾದಿಗಳನ್ನು ಕೊಂದವರು ನಿಮ್ಮ ಪಿತೃಗಳೇ! 48ಇದರಿಂದಾಗಿ,
ನಿಮ್ಮ ಪಿತೃಗಳು ಮಾಡಿದ ಕೃತ್ಯಗಳನ್ನು ನೀವು ಒಪ್ಪಿಕೊಂಡಿ
ದ್ದೀರೆಂಬುದನ್ನು ಎಲ್ಲಾ ಜನರಿಗೆ ತೋರಿಸುತ್ತೀರಿ. ಅವರು
ಪ್ರವಾದಿಗಳನ್ನು ಕೊಂದರು. ನೀವು ಪ್ರವಾದಿಗಳಿಗಾಗಿ ಗೋರಿ
ಗಳನ್ನು ಕಟ್ಟುತ್ತೀರಿ! 49ಆದಕಾರಣ ದೇವರ ಜ್ಞಾನವು ಹೇಳಿ
ದ್ದೇನಂದರೆ, ‘ನಾನು ಅವರ ಬಳಿಗೆ ಪ್ರವಾದಿಗಳನ್ನೂ ಅಪೊಸ್ತಲ
ರನ್ನೂ ಕಳುಹಿಸುವೆನು. ನನ್ನ ಕೆಲವು ಪ್ರವಾದಿಗಳು ಮತ್ತು
ಅಪೊಸ್ತಲರು ಕೆಡುಕರಿಂದ ಹತರಾಗುವರು. ಬೇರೆ ಕೆಲವರು
ಸಂಕಟಕ್ಕೆ ಗುರಿಯಾಗುವರು.’ 50ಆದ್ದರಿಂದ ಲೋಕಾದಿ
ಯಿಂದ ಹತರಾದ ಎಲ್ಲಾ ಪ್ರವಾದಿಗಳ ಸಾವಿಗೆ ಈ ಕಾಲದ
ಜನರಾದ ನೀವು ದಂಡನೆ ಹೊಂದುವಿರಿ. 51ಹೇಬೆಲನನ್ನು
ಕೊಂದದ್ದಕ್ಕಾಗಿಯೂ ಜಕರೀಯನನ್ನು ಕೊಂದದ್ದಕ್ಕಾಗಿಯೂ
ನಿಮಗೆ ದಂಡನೆಯಾಗುವುದು. ಜಕರೀಯನನ್ನು ಯಜ್ಞವೇದಿ
ಮತ್ತು ದೇವಾಲಯದ ನಡುವೆ ಕೊಲ್ಲಲಾಯಿತು. ಹೌದು,
ಅವರೆಲ್ಲರ ಕೊಲೆಗಳಿಗಾಗಿ ಈಗ ಜೀವಿಸುತ್ತಿರುವ ನಿಮಗೆ
ದಂಡನೆ ಆಗುವುದು.

52“ಧರ್ಮೋಪದೇಶಕರೇ, ನಿಮ್ಮ ಗತಿಯನ್ನು ಏನು
ಹೇಳಲಿ! ದೇವರ ಕುರಿತಾಗಿ ಕಲಿಯಲು ಸಾಧನವಾಗಿರುವ

---

**ಅಕ್ಷರಶಃ** ನೀವು ಜನರ ಮೇಲೆ ಹೊರಲಾಗದ ಹೊರೆಗಳನ್ನು ಹೊರಿಸುತ್ತೀರಿ.

**ಗೋರಿಗಳು** ಸತ್ತುಹೋದ ಪ್ರಮುಖರ ಗೌರವಾರ್ಥವಾಗಿ ಕಟ್ಟಿದ ಚಿಕ್ಕ ಕಟ್ಟಡಗಳು.

ಬೀಗದ ಕೈಯನ್ನು ನೀವು ಬಚ್ಚಿಟ್ಟಿದ್ದೀರಿ. ನೀವೂ ಕಲಿಯು
ವುದಿಲ್ಲ. ಬೇರೆಯವರಿಗೂ ಕಲಿಯಲು ಬಿಡುವುದಿಲ್ಲ.
53ಯೇಸು ಅಲ್ಲಿಂದ ಹೊರಟಾಗ ಧರ್ಮೋಪದೇಶಕರು
ಮತ್ತು ಫರಿಸಾಯರು ಆತನಿಗೆ ಮತ್ತಷ್ಟು ತೊಂದರೆ ಕೊಡಲು
ಪ್ರಾರಂಭಿಸಿದರು. ಅವರು ಅನೇಕ ಸಂಗತಿಗಳ ಕುರಿತು
ಪ್ರಶ್ನೆಗಳನ್ನು ಕೇಳಿ, ಆತನಿಂದ ಉತ್ತರ ಹೇಳಿಸುವುದಕ್ಕೆ ಪ್ರಯತ್ನಿ
ಸಿದರು. 54ಯೇಸುವನ್ನು ಮಾತಿನಲ್ಲಿ ಹಿಡಿಯಬೇಕೆಂದು
ಯೋಚಿಸಿ, ಆತನು ಏನಾದರೂ ತಪ್ಪುಹೇಳುವಂತೆ ಮಾಡಲು
ಪ್ರಯತ್ನಿಸುತ್ತಿದ್ದರು.

### ಫರಿಸಾಯರಂತಾಗಬೇಡಿ

12 ಸಾವಿರಾರು ಜನರು ಒಬ್ಬರನ್ನೊಬ್ಬರು ನೂಕುತ್ತಾ
ಕಿಕ್ಕಿರಿದು ನೆರೆದಿದ್ದರು. ಜನರಿಗೆ ಉಪದೇಶಿಸುವ
ಮೊದಲು ಯೇಸು ತನ್ನ ಶಿಷ್ಯರಿಗೆ, ‘‘ಫರಿಸಾಯರ ಹುಳಿಹಿಟ್ಟಿನ
ಬಗ್ಗೆ ಅಂದರೆ ಅವರ ಕಪಟತನದ ಬಗ್ಗೆ ಎಚ್ಚರಿಕೆಯಾಗಿರಿ.
2ಮರೆಯಾದ ಪ್ರತಿಯೊಂದೂ ಬಯಲಾಗುವುದು. ಗುಪ್ತ
ವಾಗಿರುವ ಪ್ರತಿಯೊಂದೂ ಪ್ರಕಟಿಸಲ್ಪಡುವುದು. 3ಕತ್ತಲಿನಲ್ಲಿ
(ಗುಪ್ತವಾಗಿ) ನೀವು ಹೇಳುವ ವಿಷಯಗಳು ಬೆಳಕಿನಲ್ಲಿ
(ಬಹಿರಂಗವಾಗಿ) ತಿಳಿಸಲ್ಪಡುವವು. ಗುಪ್ತವಾಗಿ ಕೋಣೆಯಲ್ಲಿ
ನೀವು ಪಿಸುಗುಟ್ಟುವ ವಿಷಯಗಳು, ಮನೆಯ ಮೇಲಿನಿಂದ
ಗಟ್ಟಿಯಾಗಿ ಪ್ರಕಟಿಸಲ್ಪಡುವವು’’ ಎಂದು ಹೇಳಿದನು.

### ದೇವರಿಗೆ ಮಾತ್ರ ಭಯಪಡಿರಿ

(ಮತ್ತಾಯ 10:28-31)

4ಬಳಿಕ ಯೇಸು ಜನರಿಗೆ ಇಂತೆಂದನು: ‘‘ಗೆಳೆಯರೇ,
ನಾನು ನಿಮಗೆ ಹೇಳುವುದೇನೆಂದರೆ, ಮನುಷ್ಯರಿಗೆ ಭಯಪಡ
ಬೇಡಿ. ಅವರು ನಿಮ್ಮನ್ನು ಕೊಲ್ಲಬಹುದಷ್ಟೇ. ಆ ಬಳಿಕ
ಬೇರೇನೂ ಮಾಡಲು ಅವರಿಂದಾಗದು. 5ನೀವು ಯಾರಿಗೆ
ಭಯಪಡಬೇಕೆಂದರೆ, ನಿಮ್ಮನ್ನು ಕೊಂದು ನರಕಕ್ಕೆ ಹಾಕಲು
ಅಧಿಕಾರವುಳ್ಳಾತನಿಗಷ್ಟೇ (ದೇವರಿಗೆ). ಹೌದು, ಆತನೊಬ್ಬ
ನಿಗೇ ನೀವು ಭಯಪಡಬೇಕು.
6‘‘ಐದು ಗುಬ್ಬಿಗಳ ಬೆಲೆ ಕೇವಲ ಎರಡೇ ಪೈಸೆಗಳು. ಆದರೆ
ದೇವರು ಅವುಗಳಲ್ಲಿ ಒಂದನ್ನೂ ಮರೆತು ಬಿಡುವುದಿಲ್ಲ.
7ಹೌದು, ನಿಮ್ಮ ತಲೆಯಲ್ಲಿ ಎಷ್ಟು ಕೂದಲುಗಳಿವೆ ಎಂಬುದು
ಸಹ ದೇವರಿಗೆ ಗೊತ್ತಿದೆ. ಹೆದರಬೇಡಿರಿ. ನೀವು ಅನೇಕ
ಗುಬ್ಬಿಗಳಿಗಿಂತ ಹೆಚ್ಚು ಬೆಲೆಯುಳ್ಳವರಾಗಿದ್ದೀರಿ.

### ಯೇಸುವಿನ ಕುರಿತು ನಾಚಿಕೆಪಡಬೇಡಿರಿ

(ಮತ್ತಾಯ 10:32-33, 12:32; 10:19-20)

8‘‘ನಾನು ನಿಮಗೆ ಹೇಳುವುದೇನಂದರೆ, ಯಾವನಾದರೂ
ಬೇರೆಯವರ ಎದುರಿನಲ್ಲಿ ತಾನು ನನ್ನವನೆಂದು ಹೇಳಿದರೆ,
ನಾನು* ಸಹ ಅವನನ್ನು ನನ್ನವನೆಂದು ದೇವದೂತರ ಮುಂದೆ
ಹೇಳುವೆನು. 9‘‘ಆದರೆ ಯಾವನಾದರೂ ಬೇರೆಯವರ ಎದುರಿ
ನಲ್ಲಿ ತಾನು ನನ್ನವನಲ್ಲವೆಂದು ಹೇಳಿದರೆ, ನಾನು ಸಹ ದೇವ
ದೂತರ ಮುಂದೆ ಅವನನ್ನು ನನ್ನವನಲ್ಲವೆಂದು ಹೇಳುವೆನು.
10‘‘ಯಾವನಾದರೂ ಮನುಷ್ಯಕುಮಾರನಿಗೆ ವಿರೋಧ
ವಾಗಿ ಮಾತಾಡಿದರೆ ಅವನಿಗೆ ಕ್ಷಮೆ ದೊರಕಬಹುದು. ಆದರೆ
ಪವಿತ್ರಾತ್ಮನನ್ನು ದೂಷಿಸುವವನಿಗೆ ಕ್ಷಮೆಯೇ ಇಲ್ಲ.
11‘‘ಜನರು ನಿಮ್ಮನ್ನು ಸಭಾಮಂದಿರಗಳಿಗೂ ನ್ಯಾಯಾಧಿ
ಪತಿಗಳ ಮತ್ತು ದೇಶಾಧಿಕಾರಿಗಳ ಬಳಿಗೂ ಎಳೆದೊಯ್ಯುವಾಗ
ಅವರಿಗೆ ಏನು ಹೇಳಬೇಕೆಂದು ಚಿಂತೆ ಮಾಡಬೇಡಿ. 12ಆ
ಸಮಯದಲ್ಲಿ ನೀವು ಹೇಳಬೇಕಾದುದನ್ನು ಪವಿತ್ರಾತ್ಮನೇ
ನಿಮಗೆ ತಿಳಿಸುವನು.’’

### ಸ್ವಾರ್ಥತೆಯ ಬಗ್ಗೆ ಯೇಸುವಿನ ಎಚ್ಚರಿಕೆ

13ಸಮೀಪದಲ್ಲಿದ್ದ ಒಬ್ಬನು ಯೇಸುವಿಗೆ, ‘‘ಉಪ
ದೇಶಕನೇ, ನಮ್ಮ ತಂದೆ ಇದೀಗ ಸತ್ತುಹೋದನು. ನಮ್ಮ
ತಂದೆಯ ಆಸ್ತಿಯಲ್ಲಿ ನನಗೆ ಪಾಲುಕೊಡಬೇಕೆಂದು ನನ್ನ
ಅಣ್ಣನಿಗೆ ಹೇಳು’’ ಎಂದು ಹೇಳಿದನು.
14ಆದರೆ ಯೇಸು ಅವನಿಗೆ, ‘‘ನಾನು ನಿಮ್ಮ ನ್ಯಾಯಾಧಿಪತಿ
ಎಂದಾಗಲಿ ನಿಮ್ಮ ತಂದೆಯ ಆಸ್ತಿಯನ್ನು ನಿಮ್ಮಿಬ್ಬರಿಗೆ
ಹಂಚಿಕೊಡುವವನು ಎಂದಾಗಲಿ ನಿನಗೆ ಯಾರು ಹೇಳಿದರು?’’
ಎಂದು ಕೇಳಿದನು. 15ಬಳಿಕ ಯೇಸು ನೆರೆದಿದ್ದ ಜನರಿಗೆ,
‘‘ಎಚ್ಚರಿಕೆ, ಯಾವ ವಿಧವಾದ ಸ್ವಾರ್ಥಕ್ಕೂ ಒಳಗಾಗದಂತೆ
ಜಾಗರೂಕರಾಗಿರಿ. ಒಬ್ಬನಿಗೆ, ಎಷ್ಟೇ ಆಸ್ತಿಯಿದ್ದರೂ ಆದರಿಂದ
ಅವನು ಜೀವವನ್ನು ಪಡೆದುಕೊಳ್ಳಲಾರನು’’ ಎಂದನು.
16ಬಳಿಕ ಯೇಸು ಈ ಸಾಮ್ಯವನ್ನು ಹೇಳಿದನು: ‘‘ಒಬ್ಬ
ಐಶ್ವರ್ಯವಂತನಿದ್ದನು. ಅವನಿಗೆ ಬಹಳ ಜಮೀನಿತ್ತು. ಒಮ್ಮೆ
ಅವನ ಜಮೀನಿನಲ್ಲಿ ಸಮೃದ್ಧಿಯಾದ ಬೆಳೆ ಆಯಿತು. 17ಆಗ
ಐಶ್ವರ್ಯವಂತನು, ‘ನಾನೇನು ಮಾಡಲಿ? ನನ್ನ ಬೆಳೆಯನ್ನೆಲ್ಲಾ
ತುಂಬಿಡಲು ನನಗೆ ಸ್ಥಳವಿಲ್ಲವಲ್ಲಾ!’ ಎಂದುಕೊಂಡನು.
18ಬಳಿಕ ಅವನು, ‘ನಾನೇನು ಮಾಡಬೇಕೆಂಬುದು ನನಗೆ
ತಿಳಿದದೆ. ನನ್ನ ಕಣಜಗಳನ್ನು ಕೆಡವಿ, ದೊಡ್ಡ ಕಣಜಗಳನ್ನು
ಕಟ್ಟುವೆನು! ನನ್ನ ಹೊಸ ಕಣಜಗಳಲ್ಲಿ ಗೋಧಿಯನ್ನೂ ಒಳ್ಳೆಯ
ಪದಾರ್ಥಗಳನ್ನೂ ತುಂಬಿಸಿಡುವೆನು. 19ಆ ಬಳಿಕ ನನಗೆ,
‘ಅನೇಕ ವರ್ಷಗಳವರೆಗೆ ಬೇಕಾದಷ್ಟು ಸರಕನ್ನು ಕೂಡಿಸಿಟ್ಟಿ
ದ್ದೇನೆ. ವಿಶ್ರಮಿಸಿಕೊ, ತಿನ್ನು, ಕುಡಿ, ಸಂತೋಷಪಡು! ಎಂದು
ಹೇಳಿಕೊಳ್ಳುವೆನು’ ಎಂಬುದಾಗಿ ಆಲೋಚಿಸಿಕೊಂಡನು.
20ಆದರೆ ದೇವರು ಅವನಿಗೆ, ‘ನೀನು ಬುದ್ಧಿಹೀನ! ಈ ರಾತ್ರಿ
ನೀನು ಸಾಯುವೆ! ಈಗ ಹೇಳು, ನೀನು ಕೂಡಿಟ್ಟ ಪದಾರ್ಥಗಳ
ಗತಿ ಏನಾಗುವುದು? ಅವು ಯಾರ ಪಾಲಾಗುತ್ತವೆ?’’ ಎಂದು
ಕೇಳಿದನು.
21‘‘ತನಗೋಸ್ಕರ ಮಾತ್ರ ಸಂಪತ್ತನ್ನು ಕೂಡಿಸಿಟ್ಟುಕೊಳ್ಳು
ವವನ ಗತಿ ಇದೇ. ದೇವರ ದೃಷ್ಟಿಯಲ್ಲಿ ಅವನು ಐಶ್ವರ್ಯ
ವಂತನಲ್ಲ.’’

### ದೇವರ ರಾಜ್ಯಕ್ಕೆ ಮೊದಲನೆ ಪ್ರಾಧಾನ್ಯತೆ

(ಮತ್ತಾಯ 6:25-34; 19-21)

22ಯೇಸು ತನ್ನ ಶಿಷ್ಯರಿಗೆ ಹೀಗೆ ಹೇಳಿದನು: ‘‘ಈ
ಕಾರಣದಿಂದ ನಾನು ನಿಮಗೆ ಹೇಳುವುದೇನೆಂದರೆ, ನಿಮ್ಮ
ಪ್ರಾಣಧಾರಣೆಗೆ ಬೇಕಾದ ಊಟಕ್ಕಾಗಿ ಮತ್ತು ತೊಟ್ಟು
ಕೊಳ್ಳಲು ಬೇಕಾದ ಬಟ್ಟೆಗಾಗಿ ಚಿಂತಿಸಬೇಡಿರಿ. 23ಆಹಾರಕ್ಕಿಂತ

---

**ನಾನು** ಅಕ್ಷರಶಃ ‘‘ಮನುಷ್ಯಕುಮಾರನು’’ (ಯೇಸು).

ಪ್ರಾಣ ಹೆಚ್ಚು ಪ್ರಾಮುಖ್ಯವಾದದ್ದು. ಬಟ್ಟೆಗಿಂತಲೂ ದೇಹ
ಹೆಚ್ಚು ಪ್ರಾಮುಖ್ಯವಾದದ್ದು. 24ಪಕ್ಷಿಗಳನ್ನು ನೋಡಿರಿ. ಅವು
ಬಿತ್ತುವುದೂ ಇಲ್ಲ. ಕೊಯ್ಯುವುದೂ ಇಲ್ಲ. ಅವು ಆಹಾರವನ್ನು
ಮನೆಗಳಲ್ಲಾಗಲಿ ಕಣಜಗಳಲ್ಲಾಗಲಿ ತುಂಬಿಟ್ಟುಕೊಳ್ಳುವುದಿಲ್ಲ.
ದೇವರೇ ಅವುಗಳನ್ನು ಪರಿಪಾಲಿಸುತ್ತಾನೆ. ನೀವು ಪಕ್ಷಿಗಳಿಗಿಂತ
ಎಷ್ಟೋ ಅಮೂಲ್ಯರಾಗಿದ್ದೀರಿ. 25ನೀವು ಊಟ ಬಟ್ಟೆಗಳಿಗಾಗಿ
ಎಷ್ಟೇ ಚಿಂತಿಸಿದರೂ ನಿಮ್ಮ ಆಯುಷ್ಯೇನೂ ಹೆಚ್ಚಾಗುವುದಿಲ್ಲ.
26ಚಿಕ್ಕ ಕಾರ್ಯಗಳನ್ನೇ ಮಾಡಲು ನಿಮಗೆ ಸಾಧ್ಯವಿಲ್ಲ
ದಿರುವಾಗ, ದೊಡ್ಡ ಕಾರ್ಯಗಳ ಕುರಿತು ನೀವು ಚಿಂತಿಸುವು
ದೇಕೆ? 27ಅಡವಿಯ ಹೂವುಗಳು ಬೆಳೆಯುವ ಬಗೆಯನ್ನು
ನೋಡಿರಿ. ಅವು ದುಡಿಯುವುದಿಲ್ಲ. ತಮಗಾಗಿ ಉಡುಪು
ಗಳನ್ನು ಹೊಲಿದುಕೊಳ್ಳುವುದಿಲ್ಲ. ಆದರೂ ಸೊಲೊಮೋನ
ರಾಜನು ತನ್ನ ಸಕಲ ವೈಭವದಲ್ಲಿ ಇದ್ದಾಗಲೂ ಈ ಹೂವುಗಳಲ್ಲಿ
ಒಂದರಷ್ಟೂ ಸುಂದರವಾದ ಉಡುಪನ್ನು ಧರಿಸಿರಲಿಲ್ಲ.
28ದೇವರು ಬಯಲಿನ ಹುಲ್ಲಿಗೂ ಹೀಗೆ ಉಡಿಸುತ್ತಾನೆ. ಹುಲ್ಲಾ
ದರೋ ಈ ಹೊತ್ತಿದ್ದು ನಾಳೆ ಬೆಂಕಿಯ ಪಾಲಾಗುವುದು.
ಹೀಗಿರಲು ದೇವರು ನಿಮಗೆ ಎಷ್ಟೋ ಹೆಚ್ಚಾಗಿ ಉಡಿಸುವು
ದಿಲ್ಲವೇ? ಆದ್ದರಿಂದ ಅಲ್ಪವಿಶ್ವಾಸಿಗಳಾಗಿರಬೇಡಿ! 29ಏನು
ಊಟ ಮಾಡಬೇಕು? ಏನು ಕುಡಿಯಬೇಕು? ಎಂದು
ಯಾವಾಗಲೂ ಆಲೋಚಿಸಬೇಡಿರಿ ಮತ್ತು ಚಿಂತಿಸಬೇಡಿರಿ.
30ಅವುಗಳನ್ನು ಪಡೆದುಕೊಳ್ಳುವುದಕ್ಕಾಗಿ ಲೋಕದ ಜನ
ರೆಲ್ಲರೂ ಪ್ರಯತ್ನಿಸುತ್ತಾರೆ. ಅವುಗಳ ಅವಶ್ಯಕತೆ ನಿಮಗೂ ಇದೆ
ಎಂಬುದು ನಿಮ್ಮ ತಂದೆಗೆ (ದೇವರು) ತಿಳಿದಿದೆ. 31ನೀವು ದೇವರ
ರಾಜ್ಯಕ್ಕೆ ಮೊದಲನೆ ಪ್ರಾಧಾನ್ಯತೆಯನ್ನು ಕೊಡಿರಿ. ಆಗ ನಿಮಗೆ
ಬೇಕಾಗಿರುವ ಉಳಿದವುಗಳನ್ನು ಕೊಡಲಾಗುವುದು.

### ಹಣದಲ್ಲಿ ಭರವಸೆ ಇಡಬೇಡಿ

32“ಚಿಕ್ಕ ಮಂದೆಯೇ, ಹೆದರಬೇಡ, ನಿಮಗೆ ರಾಜ್ಯವನ್ನು
ಕೊಡಲು ನಿಮ್ಮ ತಂದೆ ಬಯಸಿದ್ದಾನೆ. 33ನಿಮ್ಮಲ್ಲಿರುವ ಆಸ್ತಿ
ಯನ್ನು ಮಾರಿ, ಬಂದ ಹಣವನ್ನು ಕೊರತೆಯಲ್ಲಿರುವ ಜನರಿಗೆ
ಕೊಡಿರಿ. ಈ ಲೋಕದ ಐಶ್ವರ್ಯ ಶಾಶ್ವತವಲ್ಲ. ಆದ್ದರಿಂದ
ಶಾಶ್ವತವಾದ ಐಶ್ವರ್ಯವನ್ನು ಗಳಿಸಿಕೊಳ್ಳಿರಿ. ಲಯವಾಗದ
ಸಂಪತ್ತನ್ನು ಪರಲೋಕದಲ್ಲಿ ಶೇಖರಿಸಿಟ್ಟುಕೊಳ್ಳಿರಿ. ಆ
ಭಂಡಾರವನ್ನು ಕಳ್ಳರು ಕದಿಯಲಾಗುವುದಿಲ್ಲ ಮತ್ತು ಹುಳಗಳು
ನಾಶಮಾಡಲಾಗುವುದಿಲ್ಲ. 34ನಿಮ್ಮ ಭಂಡಾರ ಎಲ್ಲಿದೆಯೋ
ಅಲ್ಲಿಯೇ ನಿಮ್ಮ ಹೃದಯವೂ ಇರುತ್ತದೆ.

### ಯಾವಾಗಲೂ ಸಿದ್ಧವಾಗಿರಿ

(ಮತ್ತಾಯ 24:45-51)

35“ಉಡುಪನ್ನು ಧರಿಸಿಕೊಂಡು ಪೂರ್ಣಸಿದ್ಧರಾಗಿರಿ!
ನಿಮ್ಮ ದೀಪಗಳು ಉರಿಯುತ್ತಿರಲಿ. 36ಮದುವೆಯ ಔತಣದಿಂದ
ಮನೆಗೆ ಮರಳಿ ಬರುವ ಯಜಮಾನನನ್ನು ಎದುರುನೋಡು
ತ್ತಿರುವ ಸೇವಕರಂತಿರಿ. ಯಜಮಾನನು ಬಂದು ಬಾಗಿಲನ್ನು
ತಟ್ಟಿದಾಗ ಸೇವಕರು ಬಾಗಿಲನ್ನು ತೆರೆಯುತ್ತಾರೆ. 37ಆ
ಸೇವಕರೇ ಧನ್ಯರು. ಏಕೆಂದರೆ, ಅವರು ಸಿದ್ಧರಾಗಿದ್ದು ತನ
ಗೋಸ್ಕರ ಕಾಯುತ್ತಿದ್ದುದನ್ನು ಯಜಮಾನನು ನೋಡುತ್ತಾನೆ.
ನಾನು ನಿಮಗೆ ಸತ್ಯವಾಗಿ ಹೇಳುವುದೇನಂದರೆ, ಆಗ ಯಜ
ಮಾನನು ತಾನೇ ಸೇವಕರ ಉಡುಪನ್ನು ಧರಿಸಿಕೊಂಡು, ಆ
ಸೇವಕರನ್ನು ಕುಳ್ಳಿರಿಸಿ, ಅವರಿಗೆ ಊಟ ಬಡಿಸುತ್ತಾನೆ. 38ಆ
ಆಳುಗಳು ತಮ್ಮ ಯಜಮಾನನಿಗಾಗಿ ಮಧ್ಯರಾತ್ರಿಯವರೆಗೆ
ಅಥವಾ ಇನ್ನೂ ಹೆಚ್ಚು ಸಮಯದವರೆಗೆ ಎಚ್ಚರದಿಂದ
ಇರಬೇಕಾಗಬಹುದು. ಆದರೆ ಯಜಮಾನನು ಬಂದು, ಇನ್ನೂ
ಎಚ್ಚರದಿಂದಿರುವ ಅವರನ್ನು ಕಂಡಾಗ ಅವರಿಗೆ ಸಂತೋಷ
ವಾಗುವುದು. 39ಇದು ನಿಮ್ಮ ನೆನಪಿನಲ್ಲಿರಲಿ: ಕಳ್ಳನು ಬರುವ
ಗಳಿಗೆಯು ಯಜಮಾನನಿಗೆ ತಿಳಿದರೆ, ಅವನು ತನ್ನ ಮನೆಗೆ
ಕನ್ನಹಾಕಲು ಬಿಡುವನೇ? ಇಲ್ಲ! 40ಅಂತೆಯೇ, ನೀವೂ
ಸಿದ್ಧರಾಗಿರಿ! ನೀವು ನಿರೀಕ್ಷಿಸದ ಗಳಿಗೆಯಲ್ಲಿ ಮನುಷ್ಯ
ಕುಮಾರನು ಬರುವನು!”

### ನಂಬಿಗಸ್ತನಾದ ಆಳು ಯಾರು?

41ಪೇತ್ರನು, “ಪ್ರಭುವೇ, ನೀನು ಈ ಸಾಮ್ಯವನ್ನು ಹೇಳಿದ್ದು
ನಮಗಾಗಿಯೋ ಅಥವಾ ಎಲ್ಲಾ ಜನರಿಗಾಗಿಯೋ?” ಎಂದು
ಕೇಳಿದನು.

42ಪ್ರಭುವು ಹೀಗೆಂದನು: “ವಿವೇಕಿಯೂ ನಂಬಿಗಸ್ತನೂ
ಆದ ಆಳು ಯಾರು? ಕಾಲಕಾಲಕ್ಕೆ ಸರಿಯಾಗಿ ಕೂಲಿಯಾಳು
ಗಳಿಗೆ ದವಸಧಾನ್ಯವನ್ನು ಅಳೆದುಕೊಟ್ಟು, ಮನೆಯ ಮೇಲ್ವಿ
ಚಾರಣೆಯನ್ನು ನೋಡಿಕೊಳ್ಳಲು ಯಜಮಾನನಿಂದ ನೇಮಿಸ
ಲ್ಪಟ್ಟವನೇ. 43ಆ ಸೇವಕನು ತನ್ನ ಕರ್ತವ್ಯವನ್ನು ನಿಷ್ಠೆಯಿಂದ
ಮಾಡುತ್ತಿದ್ದರೆ, ಯಜಮಾನನು ಬಂದಾಗ ಅವನಿಗೆ ಬಹಳ
ಸಂತೋಷವಾಗುವುದು. 44ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ಯಜಮಾನನು ಆ ಸೇವಕನನ್ನು ತನ್ನ ಆಸ್ತಿಗೆಲ್ಲಾ
ಮೇಲ್ವಿಚಾರಕನನ್ನಾಗಿ ನೇಮಿಸುವನು. 45ಆದರೆ ಆ ಸೇವಕನು
ದುಷ್ಟನಾಗಿ, ತನ್ನ ಯಜಮಾನನು ಬೇಗನೆ ಹಿಂತಿರುಗಿ
ಬರುವುದಿಲ್ಲ ಎಂದುಕೊಂಡರೆ ಏನಾಗುವುದು? ಆ ಸೇವಕನು
ಯಜಮಾನನ ಇತರ ದಾಸದಾಸಿಯರನ್ನು ಹೊಡೆಯುವುದಕ್ಕೂ
ತಿಂದು ಕುಡಿದು ಮತ್ತನಾಗುವುದಕ್ಕೂ ತೊಡಗುವನು. 46ಬಳಿಕ
ಅವನು ನಿರೀಕ್ಷಿಸಿಲ್ಲದ ಗಳಿಗೆಯಲ್ಲಿ ಯಜಮಾನನು ಬಂದು
ಅವನನ್ನು ದಂಡಿಸಿ, ಅಪನಂಬಿಗಸ್ತರಿರುವ ಸ್ಥಳಕ್ಕೆ ದಬ್ಬುವನು.

47“ತನ್ನ ಯಜಮಾನನು ತನ್ನಿಂದ ಏನು ಅಪೇಕ್ಷಿಸುತ್ತಾನೆ
ಎಂಬುದು ಆ ಸೇವಕನಿಗೆ ಗೊತ್ತಿತ್ತು. ಆದರೆ ಅವನು ತನ್ನನ್ನು
ಸಿದ್ಧಪಡಿಸಿಕೊಳ್ಳಲಿಲ್ಲ ಮತ್ತು ತನ್ನ ಕೆಲಸವನ್ನು ಪೂರೈಸಲು
ಪ್ರಯತ್ನಿಸಲಿಲ್ಲ. ಆದ್ದರಿಂದ ಅವನು ಕಠಿಣ ದಂಡನೆಗೆ ಗುರಿ
ಯಾಗುವನು! 48ಆದರೆ ತನ್ನ ಯಜಮಾನನ ಬಯಕೆಯನ್ನು
ತಿಳಿದಿಲ್ಲದ ಸೇವಕನಿಗೆ ಏನಾಗುವುದು? ಇವನು ಸಹ ದಂಡನೆಗೆ
ಅರ್ಹವಾದ ಕಾರ್ಯಗಳನ್ನು ಮಾಡುತ್ತಾನೆ. ಆದರೆ ತನ್ನ
ಕರ್ತವ್ಯವನ್ನು ತಿಳಿದಿದ್ದರೂ ಮಾಡದೆ ಹೋದ ಸೇವಕನಿಗಿಂತ
ಇವನಿಗೆ ಕಡಿಮೆ ದಂಡನೆ ಆಗುವುದು. ಹೆಚ್ಚು ಪಡೆದವನಿಂದ
ಹೆಚ್ಚು ನಿರೀಕ್ಷಿಸಲಾಗುವುದು. ಇನ್ನೂ ಹೆಚ್ಚು ಪಡೆದವನಿಂದ
ಇನ್ನೂ ಹೆಚ್ಚಾಗಿ ನಿರೀಕ್ಷಿಸಲಾಗುವುದು.”

### ಯೇಸುವಿನ ಬಗ್ಗೆ ಭಿನ್ನಾಭಿಪ್ರಾಯ

(ಮತ್ತಾಯ 10:34-36)

49ಯೇಸು ತನ್ನ ಮಾತನ್ನು ಮುಂದುವರೆಸಿ ಇಂತೆಂದನು:
“ನಾನು ಈ ಲೋಕಕ್ಕೆ ಬೆಂಕಿ ಹಾಕಲು ಬಂದೆನು! ಅದು

ಇಷ್ಟರೊಳಗೆ ಉರಿಯುತ್ತಿದ್ದರೆ ನನಗೆ ಸಂತೋಷ! 50ನಾನು
ಬೇರೊಂದು ರೀತಿಯ ದೀಕ್ಷಾಸ್ನಾನ ಹೊಂದಬೇಕು. ಅದನ್ನು
ಹೊಂದುವ ತನಕ ನಾನು ಬಹಳ ತೊಂದರೆಯಲ್ಲಿದ್ದೇನೆ.
51ನಾನು ಲೋಕಕ್ಕೆ ಸಮಾಧಾನವನ್ನು ಕೊಡುವುದಕ್ಕೆ ಬಂದೆ
ನೆಂದು ನೀವು ಭಾವಿಸುತ್ತೀರೋ? ಇಲ್ಲ! ನಾನು ಲೋಕದಲ್ಲಿ
ಭೇದವನ್ನು ಉಂಟುಮಾಡಲು ಬಂದೆನು! 52ಇಂದಿನಿಂದ, ಐದು
ಜನರಿರುವ ಕುಟುಂಬದಲ್ಲಿ ಭೇದ ಉಂಟಾಗುವುದು. ಅವರಲ್ಲಿ
ಮೂವರು ಇಬ್ಬರಿಗೆ ವಿರೋಧವಾಗುವರು; ಮತ್ತು ಇಬ್ಬರು
ಮೂವರಿಗೆ ವಿರೋಧವಾಗುವರು.

53 ತಂದೆಗೂ ಮಗನಿಗೂ ಭೇದ ಉಂಟಾಗುವುದು.
ಮಗನು ತನ್ನ ತಂದೆಗೆ ವಿರೋಧವಾಗುವನು.
ತಂದೆಯು ತನ್ನ ಮಗನಿಗೆ ವಿರೋಧವಾಗುವನು.
ತಾಯಿಗೂ ಮಗಳಿಗೂ ಭೇದ ಉಂಟಾಗುವುದು.
ಮಗಳು ತನ್ನ ತಾಯಿಗೆ ವಿರೋಧವಾಗುವಳು,
ತಾಯಿ ತನ್ನ ಮಗಳಿಗೆ ವಿರೋಧವಾಗುವಳು.
ಅತ್ತೆಗೂ ಸೊಸೆಗೂ ಭೇದವಿರುವುದು.
ಸೊಸೆಯು ತನ್ನ ಅತ್ತೆಗೆ ವಿರೋಧವಾಗುವಳು.
ಅತ್ತೆಯು ತನ್ನ ಸೊಸೆಗೆ ವಿರೋಧವಾಗುವಳು.''

### ಕಾಲಮಾನವನ್ನು ಗ್ರಹಿಸಿಕೊಳ್ಳಿರಿ
(ಮತ್ತಾಯ 16:2-3)

54ಬಳಿಕ ಯೇಸು ಜನರಿಗೆ ಇಂತೆಂದನು: ''ಮೋಡವು
ಪಶ್ಚಿಮ ದಿಕ್ಕಿನಲ್ಲಿ ದೊಡ್ಡದಾಗಿರುತ್ತಿರುವುದನ್ನು ನೀವು
ನೋಡುವಾಗ 'ಇಂದು ಮಳೆ ಬರುತ್ತದೆ' ಎಂದು ಹೇಳುತ್ತೀರಿ.
ಅಂತೆಯೇ ಅಂದು ಮಳೆಯಾಗುತ್ತದೆ. 55ದಕ್ಷಿಣ ದಿಕ್ಕಿನಿಂದ
ಗಾಳಿಬೀಸತೊಡಗಿದಾಗ, 'ಈ ದಿನ ತುಂಬಾ ಸೆಕೆ ಇರುವುದು'
ಎನ್ನುತ್ತೀರಿ. ಅಂತೆಯೇ ಸೆಕೆ ಇರುವುದು. 56ನೀವು ಕಪಟಿಗಳು!
ಹವಾಮಾನವನ್ನು ತಿಳಿದುಕೊಳ್ಳಬಲ್ಲ ನೀವು ಈಗ
ನಡೆಯುತ್ತಿರುವುದನ್ನು ಗ್ರಹಿಸಿಕೊಳ್ಳಲು ಸಾಧ್ಯವಿಲ್ಲವೇ?

### ನಿಮ್ಮ ಸಮಸ್ಯೆಗಳನ್ನು ಬಗೆಹರಿಸಿರಿ
(ಮತ್ತಾಯ 5:25-26)

57''ನೀವೇ ನ್ಯಾಯನಿರ್ಣಯವನ್ನು ಮಾಡಬಾರದೇಕೆ?
58ಒಬ್ಬನು ನಿಮ್ಮ ಮೇಲೆ ದಾವೆ ಹೂಡಲು ನ್ಯಾಯಾಲಯಕ್ಕೆ
ಹೋಗುತ್ತಿರುವಾಗ ನಿಮ್ಮ ಸಮಸ್ಯೆಯನ್ನು ದಾರಿಯಲ್ಲಿಯೇ
ಪರಿಹರಿಸಲು ನಿಮ್ಮಿಂದಾದಷ್ಟು ಪ್ರಯತ್ನಿಸಿರಿ. ಇಲ್ಲವಾದರೆ,
ಅವನು ನಿಮ್ಮನ್ನು ನ್ಯಾಯಾಧೀಶನ ಬಳಿಗೆ ಕೊಂಡೊಯ್ಯುವನು.
ನ್ಯಾಯಾಧೀಶನು ನಿಮ್ಮನ್ನು ಸೆರೆಮನೆಗೆ ಹಾಕಿಸುವನು 59ನೀನು
ನಿನ್ನ ಸಾಲವನ್ನೆಲ್ಲಾ ಕೊನೆಯ ಪೈಸದವರೆಗೆ ತೀರಿಸುವ ತನಕ
ಸೆರೆಮನೆಯಿಂದ ಹೊರಗೆ ಬರಲು ಸಾಧ್ಯವೇ ಇಲ್ಲ!''

### ಹೃದಯ ಪರಿವರ್ತನೆ

13 ಅದೇ ಸಮಯದಲ್ಲಿ ಅಲ್ಲಿದ್ದ ಕೆಲವರು ಯೇಸುವಿನ
ಬಳಿಗೆ ಬಂದು, ಗಲಿಲೇಯದಲ್ಲಿ ಯಜ್ಞ ಅರ್ಪಿಸು
ತ್ತಿದ್ದವರನ್ನು ಪಿಲಾತನು* ಕೊಲ್ಲಿಸಿದ್ದನ್ನೂ ಅವರು ಯಜ್ಞವಾಗಿ
ಅರ್ಪಿಸಿದ್ದ ಪಶುಗಳ ರಕ್ತದೊಡನೆ ಅವರ ರಕ್ತವನ್ನು ಬೆರಸಿ
ದ್ದನ್ನೂ ಯೇಸುವಿಗೆ ತಿಳಿಸಿದರು. 2ಯೇಸು ಅವರಿಗೆ, ''ಕೊಲೆ
ಗೀಡಾದವರು ಗಲಿಲೇಯದ ಇತರರೆಲ್ಲರಿಗಿಂತ ಹೆಚ್ಚು ಪಾಪಿ
ಗಳಾಗಿದ್ದರೆಂದು ಭಾವಿಸುತ್ತೀರೋ? 3ಇಲ್ಲ! ಅವರು ಅಂತಹ
ಪಾಪಿಗಳಾಗಿರಲಿಲ್ಲ! ಆದರೆ ನೀವು ನಿಮ್ಮ ಪಾಪಗಳಿಗಾಗಿ
ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳದಿದ್ದರೆ ಅವ
ರಂತೆಯೇ ನಾಶವಾಗುವಿರಿ! 4ಸಿಲೊವಾ ಎಂಬಲ್ಲಿ ಗೋಪುರ
ಕುಸಿದು ಬಿದ್ದಾಗ, ಸತ್ತುಹೋದ ಹದಿನೆಂಟು ಮಂದಿಯ ಕುರಿತು
ನಿಮ್ಮ ಅಭಿಪ್ರಾಯವೇನು? ಜೆರುಸಲೇಮಿನಲ್ಲಿ ವಾಸವಾಗಿದ್ದ
ಇತರರೆಲ್ಲರಿಗಿಂತಲೂ ಅವರು ಹೆಚ್ಚು ಪಾಪಿಗಳಾಗಿದ್ದರೆಂದು
ಭಾವಿಸುತ್ತೀರೋ? 5ಅವರು ಅಂತಹ ಪಾಪಿಗಳಾಗಿರಲಿಲ್ಲ!
ಆದರೆ ನೀವು ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ
ಕಡೆಗೆ ತಿರುಗಿಕೊಳ್ಳದಿದ್ದರೆ ಅವರಂತೆಯೇ ನಾಶವಾಗುವಿರಿ
ಎಂದು ನಾನು ನಿಮಗೆ ಹೇಳುತ್ತೇನೆ!'' ಎಂದು ಉತ್ತರಿಸಿದನು.

### ಉಪಯೋಗವಿಲ್ಲದ ಮರ

6ಯೇಸು ಈ ಸಾಮ್ಯವನ್ನು ಹೇಳಿದನು: ''ಒಬ್ಬನು ತನ್ನ
ತೋಟದಲ್ಲಿ ಒಂದು ಅಂಜೂರದ ಮರವನ್ನು ನೆಡಿಸಿದ್ದನು.
ಒಮ್ಮೆ ಅವನು ಆ ಮರ ಹಣ್ಣನ್ನು ಫಲಿಸಿರಬಹುದೆಂದು ಅಲ್ಲಿಗೆ
ಬಂದನು. ಆದರೆ ಅವನು ಅದರಲ್ಲಿ ಒಂದು ಹಣ್ಣನ್ನೂ ಕಾಣ
ಲಿಲ್ಲ. 7ಅವನು ತನ್ನ ತೋಟವನ್ನು ನೋಡಿಕೊಳ್ಳುವುದಕ್ಕಾಗಿ
ಒಬ್ಬ ತೋಟಗಾರನನ್ನೂ ನೇಮಿಸಿದ್ದನು. ಅವನು ತನ್ನ ಆ
ಸೇವಕನಿಗೆ, 'ಈ ಮರ ಹಣ್ಣು ಬಿಡಬಹುದೆಂದು ನಾನು ಮೂರು
ವರ್ಷದಿಂದ ಕಾಯುತ್ತಿದ್ದೇನೆ. ಆದರೆ ಇದು ಹಣ್ಣನ್ನು ಬಿಡಲೇ
ಇಲ್ಲ. ಇದನ್ನು ಕತ್ತರಿಸಿ ಹಾಕು! ಇದು ಭೂಮಿಯ ಸಾರವನ್ನೇಕೆ
ವ್ಯರ್ಥಗೊಳಿಸಬೇಕು?' ಎಂದು ಹೇಳಿದನು. 8ಆದರೆ ಆ
ಸೇವಕನು, 'ಯಜಮಾನನೇ, ಇನ್ನೊಂದು ವರ್ಷ ತಾಳಿಕೊ.
ಅದು ಫಲವನ್ನು ಕೊಡಬಹುದು. ಅದರ ಸುತ್ತಲೂ ಅಗೆದು ಸ್ವಲ್ಪ
ರಸಗೊಬ್ಬರವನ್ನು ಹಾಕುತ್ತೇನೆ. 9ಆಗ ಮುಂದಿನ ವರ್ಷ ಈ ಮರ
ಫಲವನ್ನು ಕೊಡಬಹುದು. ಒಂದು ವೇಳೆ ಇದು ಫಲವನ್ನು
ಕೊಡದಿದ್ದರೆ ನೀನು ಇದನ್ನು ಕಡಿದುಹಾಕು' ಎಂದು
ಉತ್ತರಿಸಿದನು.''

### ಯೇಸುವಿನಿಂದ ಗುಣಹೊಂದಿದ ಸ್ತ್ರೀ

10ಒಂದು ಸಬ್ಬತ್ ದಿನ ಯೇಸು ಸಭಾಮಂದಿರದಲ್ಲಿ
ಉಪದೇಶಿಸಿದನು. 11ದೆವ್ವದಿಂದ ಪೀಡಿತಳಾಗಿದ್ದ ಒಬ್ಬ ಸ್ತ್ರೀ
ಅಲ್ಲಿದ್ದಳು. ಆ ದೆವ್ವದಿಂದಾಗಿ ಆಕೆಗೆ ಹದಿನೆಂಟು ವರ್ಷಗಳಿಂದ
ನಡು ಬಗ್ಗಿಕೊಂಡಿತ್ತು. ನೆಟ್ಟಗೆ ನಿಂತುಕೊಳ್ಳಲು ಆಕೆಗೆ ಸಾಧ್ಯ
ವಿರಲಿಲ್ಲ. 12ಯೇಸು ಆಕೆಯನ್ನು ಕಂಡು, ತನ್ನ ಬಳಿಗೆ ಕರೆದು,
''ಅಮ್ಮಾ, ನಿನ್ನ ಕಾಯಿಲೆ ನಿನ್ನನ್ನು ಬಿಟ್ಟುಹೋಗಿದೆ!'' ಎಂದು
ಹೇಳಿದನು. 13ಯೇಸು ಆಕೆಯ ಮೇಲೆ ತನ್ನ ಕೈಗಳನ್ನಿಟ್ಟಾಗ ಆಕೆ
ನೆಟ್ಟಗೆ ನಿಲ್ಲಲು ಶಕ್ತಳಾದಳು. ಆಕೆ ದೇವರನ್ನು ಕೊಂಡಾಡಿದಳು.
14ಯೇಸು ಸಬ್ಬತ್ ದಿನದಲ್ಲಿ ವಾಸಿಮಾಡಿದ್ದರಿಂದ ಸಭಾ
ಮಂದಿರದ ಅಧಿಕಾರಿ ಕೋಪಗೊಂಡು ಜನರಿಗೆ, ''ಕೆಲಸಕ್ಕಾಗಿ
ವಾರದಲ್ಲಿ ಆರು ದಿನಗಳಿವೆ. ಆ ದಿನಗಳಲ್ಲಿ ಬಂದು
ವಾಸಿಮಾಡಿಸಿಕೊಳ್ಳಿರಿ. ಸಬ್ಬತ್ ದಿನದಲ್ಲಿ ವಾಸಿಮಾಡಿಸಿ
ಕೊಳ್ಳಬಾರದು'' ಎಂದು ಹೇಳಿದನು. 15ಅದಕ್ಕೆ ಪ್ರಭುವು

---

**ಪಿಲಾತನು** ಪೊಂತ್ಯ ಪಿಲಾತನು. ಜುದೇಯವನ್ನು ಕ್ರಿ. ಶ. 26ರಿಂದ 36ರವರೆಗೆ ಆಳಿದ ರೋಮಿನ ರಾಜ್ಯಪಾಲ.

(ಯೇಸು), ‘‘ನೀವು ಕಪಟಿಗಳು! ನೀವೆಲ್ಲರೂ ನಿಮ್ಮ
ದುಡಿಮೆಯ ಪಶುಗಳನ್ನು ಪ್ರತಿದಿನ ಬಿಚ್ಚಿ ನೀರು ಕುಡಿಸಲು
ಕರೆದೊಯ್ಯುತ್ತೀರಿ. ಸಬ್ಬತ್ ದಿನದಲ್ಲಿಯೂ ನೀವು ಹಾಗೆಯೇ
ಮಾಡುತ್ತೀರಿ! 16ನಾನು ವಾಸಿಮಾಡಿದ ಈ ಸ್ತ್ರೀಯಾದರೋ
ಯೆಹೂದ್ಯಳು. ಸೈತಾನನು ಆಕೆಯನ್ನು ಹದಿನೆಂಟು
ವರ್ಷಗಳಿಂದ ಕಟ್ಟಿಹಾಕಿದ್ದನು. ಆದ್ದರಿಂದ ಆಕೆಯನ್ನು ಸಬ್ಬತ್
ದಿನದಂದು ಕಾಯಿಲೆಯಿಂದ ಬಿಡುಗಡೆ ಮಾಡುವುದು
ಖಂಡಿತವಾಗಿಯೂ ತಪ್ಪಲ್ಲ!’’ ಎಂದು ಹೇಳಿದನು. 17ಈ
ಮಾತನ್ನು ಕೇಳಿದಾಗ, ಆತನನ್ನು ಟೀಕಿಸುತ್ತಿದ್ದ ಜನರೆಲ್ಲರಿಗೂ
ತಮ್ಮ ಬಗ್ಗೆ ನಾಚಿಕೆಯಾಯಿತು. ಯೇಸು ಮಾಡುತ್ತಿದ್ದ
ಅದ್ಭುತಕಾರ್ಯಗಳಿಗಾಗಿ ಜನರೆಲ್ಲರೂ ಸಂತೋಷಪಟ್ಟರು.

### ದೇವರ ರಾಜ್ಯ ಯಾವುದಕ್ಕೆ ಹೋಲಿಕೆಯಾಗಿದೆ?

(ಮತ್ತಾಯ 13:31-33, ಮಾರ್ಕ 4:30-32)

18ಬಳಿಕ ಯೇಸು, ‘‘ದೇವರ ರಾಜ್ಯ ಯಾವುದಕ್ಕೆ ಹೋಲಿಕೆ
ಯಾಗಿದೆ? ಅದನ್ನು ನಾನು ಯಾವುದಕ್ಕೆ ಹೋಲಿಸಲಿ?
19ದೇವರ ರಾಜ್ಯ ಸಾಸಿವೆ ಕಾಳಿನಂತಿದೆ. ಒಬ್ಬನು ತನ್ನ ತೋಟ
ದಲ್ಲಿ ಈ ಬೀಜವನ್ನು ಹಾಕುತ್ತಾನೆ. ಅದು ಬೆಳೆದು ಮರವಾಗು
ತ್ತದೆ. ಪಕ್ಷಿಗಳು ಅದರ ಕೊಂಬೆಗಳಲ್ಲಿ ಗೂಡುಗಳನ್ನು ಕಟ್ಟಿ
ಕೊಳ್ಳುತ್ತವೆ’’ ಎಂದು ಹೇಳಿದನು.

20ಯೇಸು ಮತ್ತೆ ಇಂತೆಂದನು: ‘‘ದೇವರ ರಾಜ್ಯವನ್ನು
ನಾನು ಯಾವುದಕ್ಕೆ ಹೋಲಿಸಲಿ? 21ಅದು, ಸ್ತ್ರೀಯೊಬ್ಬಳು
ರೊಟ್ಟಿ ಮಾಡುವುದಕ್ಕಾಗಿ ದೊಡ್ಡ ಪಾತ್ರೆಯೊಂದರಲ್ಲಿರುವ
ಹಿಟ್ಟಿಗೆ ಬೆರೆಸುವ ಹುಳಿಯಂತಿದೆ. ಆ ಹುಳಿಯು ನಾದಿದ
ಹಿಟ್ಟನ್ನೆಲ್ಲ ಉಬ್ಬಿಸುತ್ತದೆ.’’

### ಕಿರಿದಾದ ಬಾಗಿಲು

(ಮತ್ತಾಯ 7:13-14; 21-23)

22ಯೇಸು ಪ್ರತಿಯೊಂದು ಊರಿನಲ್ಲಿಯೂ ಹಳ್ಳಿ
ಯಲ್ಲಿಯೂ ಉಪದೇಶಿಸುತ್ತಾ ಜೆರುಸಲೇಮಿನ ಕಡೆಗೆ
ಪ್ರಯಾಣ ಮಾಡಿದನು. 23ಯಾರೋ ಒಬ್ಬನು ಯೇಸುವಿಗೆ,
‘‘ಸ್ವಾಮೀ, ಎಷ್ಟು ಜನರು ರಕ್ಷಿಸಲ್ಪಡುವರು? ಕೇವಲ ಸ್ವಲ್ಪ
ಜನರೋ?’’ ಎಂದು ಕೇಳಿದನು.

24ಅದಕ್ಕೆ ಯೇಸು, ‘‘ಸ್ವರ್ಗಕ್ಕೆ ನಡೆಸುವ ಕಿರಿದಾದ ಬಾಗಿಲಿನ
ಮೂಲಕ ಹೋಗಲು ಪ್ರಯಾಸಪಡಿರಿ! ಅನೇಕ ಜನರು ಅದರ
ಮೂಲಕ ಹೋಗಲು ಪ್ರಯತ್ನಿಸುತ್ತಾರೆ. ಆದರೆ ಅವರಿಂದ
ಆಗುವುದಿಲ್ಲ. 25ಮನೆಯ ಯಜಮಾನನು ಎದ್ದು ಬಾಗಿಲನ್ನು
ಮುಚ್ಚಿದ ಮೇಲೆ ನೀವು ಹೊರಗೆ ನಿಂತುಕೊಂಡು ಬಾಗಿಲು
ತಟ್ಟಬೇಕಷ್ಟೇ, ಆದರೂ ಅವನು ತೆರೆಯುವುದಿಲ್ಲ. ‘ಸ್ವಾಮೀ,
ನಮಗೆ ಬಾಗಿಲು ತೆರೆ!’ ಎಂದು ನೀವು ಕೇಳುವಿರಿ. ಅವನು
ನಿಮಗೆ, ‘ನೀವು ಯಾರೋ ನನಗೆ ತಿಳಿಯದು. ನೀವು
ಎಲ್ಲಿಯವರು?’ ಎಂದು ಉತ್ತರಿಸುವನು. 26ಆಗ ನೀವು, ‘ನಾವು
ನಿನ್ನೊಡನೆ ಊಟ ಮಾಡಿದೆವು, ಪಾನ ಮಾಡಿದೆವು. ನೀನು ನಮ್ಮ
ಬೀದಿಗಳಲ್ಲಿ ನಮಗೆ ಉಪದೇಶಿಸಿದೆ’ ಎಂದು ಹೇಳುವಿರಿ. 27ಆಗ
ಅವನು ನಿಮಗೆ, ‘ನೀವು ಯಾರೋ ನನಗೆ ಗೊತ್ತಿಲ್ಲ! ನೀವು
ಎಲ್ಲಿಯವರು? ಇಲ್ಲಿಂದ ಹೊರಟುಹೋಗಿ! ನೀವೆಲ್ಲರೂ ಪಾಪ
ಕಾರ್ಯಗಳನ್ನು ಮಾಡುವ ಜನರು!’ ಎಂದು ನಿಮಗೆ ಹೇಳು
ವನು. 28ಅಬ್ರಹಾಮ, ಇಸಾಕ, ಯಾಕೋಬ ಮತ್ತು ಎಲ್ಲಾ
ಪ್ರವಾದಿಗಳು ದೇವರ ರಾಜ್ಯದಲ್ಲಿರುವುದನ್ನು ನೀವು ನೋಡು
ವಿರಿ. ಆದರೆ ನಿಮ್ಮನ್ನು ಹೊರಗೆ ಹಾಕಲಾಗುವುದು. ಆಗ ನೀವು
ಭಯದಿಂದಲೂ ಕೋಪದಿಂದಲೂ ಕೂಗಿಕೊಳ್ಳುವಿರಿ.
29ಜನರು ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ದಿಕ್ಕುಗಳಿಂದ
ಬರುವರು. ಅವರು ದೇವರ ರಾಜ್ಯದಲ್ಲಿ ಊಟಕ್ಕೆ ಕುಳಿತು
ಕೊಳ್ಳುವರು. 30ಇಗೋ, ಕಡೆಯವರಾಗಿರುವ ಕೆಲವರು
ಮೊದಲಿನವರಾಗುವರು, ಮೊದಲಿನವರಾಗಿರುವ ಕೆಲವರು
ಕಡೆಯವರಾಗುವರು.’’

### ಜೆರುಸಲೇಮಿನಲ್ಲಿ ಯೇಸುವಿನ ಮರಣ

(ಮತ್ತಾಯ 23:37-39)

31ಆ ಸಮಯದಲ್ಲಿ ಕೆಲವು ಫರಿಸಾಯರು ಯೇಸುವಿನ
ಬಳಿಗೆ ಬಂದು, ‘‘ಇಲ್ಲಿಂದ ಹೋಗಿ ಅಡಗಿಕೊ! ಹೆರೋದನು
ನಿನ್ನನ್ನು ಕೊಲ್ಲಬೇಕೆಂದಿದ್ದಾನೆ!’’ ಎಂದು ಹೇಳಿದರು.

32ಯೇಸು ಅವರಿಗೆ, ‘‘ನೀವು ಹೋಗಿ ಆ ನರಿಗೆ
(ಹೆರೋದನಿಗೆ), ‘ಈ ದಿನ ಮತ್ತು ನಾಳೆ ನಾನು ಜನರನ್ನು
ದೆವ್ವಗಳಿಂದ ಬಿಡಿಸುತ್ತೇನೆ ಮತ್ತು ರೋಗಿಗಳನ್ನು ಗುಣ
ಪಡಿಸುವ ಕಾರ್ಯವನ್ನು ಪೂರ್ಣಗೊಳಿಸುತ್ತೇನೆ. ನಾಳಿದ್ದು,
ನನ್ನ ಕಾರ್ಯವೆಲ್ಲಾ ಸಂಪೂರ್ಣ ಮುಕ್ತಾಯವಾಗುವುದು’
ಎಂದು ಹೇಳಿರಿ. 33ಅನಂತರ ನಾನು ಜೆರುಸಲೇಮಿಗೆ ಹೋಗ
ಬೇಕು. ಏಕೆಂದರೆ ಪ್ರವಾದಿಗಳು ಅಲ್ಲೇ ಕೊಲ್ಲಲ್ಪಡತಕ್ಕದ್ದು.

34‘‘ಜೆರುಸಲೇಮೇ, ಜೆರುಸಲೇಮೇ! ನೀನು ಪ್ರವಾದಿ
ಗಳನ್ನು ಕೊಲ್ಲುವವಳು. ದೇವರು ನಿನ್ನ ಬಳಿಗೆ ಕಳುಹಿಸಿದ
ಜನರನ್ನು ನೀನು ಕಲ್ಲೆಸೆದು ಕೊಲ್ಲುವೆ. ಕೋಳಿ ತನ್ನ ಮರಿಗಳನ್ನು
ತನ್ನ ರೆಕ್ಕೆಗಳ ಕೆಳಗೆ ಕೂಡಿಸಿಕೊಳ್ಳುವಂತೆ ನಾನು ನಿನ್ನ ಜನರಿಗೆ
ಸಹಾಯ ಮಾಡಲು ಎಷ್ಟೋ ಸಲ ಅಪೇಕ್ಷಿಸಿದೆ. ಆದರೆ ನೀನು
ನನಗೆ ಆಸ್ಪದವನ್ನು ಕೊಡಲಿಲ್ಲ. 35ನಿಮ್ಮ ಆಲಯವು ಬರಿದಾಗು
ವುದು. ‘ಪ್ರಭುವಿನ ಹೆಸರಿನಲ್ಲಿ ಬರುವಾತನಿಗೆ ಆಶೀರ್ವಾದ!’ *
ಎಂದು ಹೇಳುವ ಸಮಯದ ತನಕ ನೀನು ನನ್ನನ್ನು ನೋಡು
ವುದೇ ಇಲ್ಲವೆಂದು ನಾನು ನಿನಗೆ ಹೇಳುತ್ತೇನೆ’’ ಎಂದನು.

### ಸಬ್ಬತ್ ದಿನದಲ್ಲಿ ವಾಸಿ ಮಾಡುವುದು ಸರಿಯೋ?

14 ಒಂದು ಸಬ್ಬತ್ ದಿನದಲ್ಲಿ ಯೇಸು ಒಬ್ಬ ಪ್ರಮುಖ
ಫರಿಸಾಯನ ಮನೆಗೆ ಊಟಕ್ಕೆ ಹೋದನು. ಅಲ್ಲಿದ್ದ
ಜನರೆಲ್ಲರೂ ಯೇಸುವನ್ನೇ ದೃಷ್ಟಿಸಿ ನೋಡುತ್ತಿದ್ದರು. 2ಯೇಸು
ವಿನ ಎದುರಿನಲ್ಲಿಯೇ ಜಲೋದರ * ರೋಗವುಳ್ಳ ಒಬ್ಬನನ್ನು
ಇರಿಸಿದ್ದರು. 3ಯೇಸು ಫರಿಸಾಯರಿಗೂ ಧರ್ಮೋಪ
ದೇಶಕರಿಗೂ, ‘‘ಸಬ್ಬತ್ ದಿನದಲ್ಲಿ ವಾಸಿ ಮಾಡುವುದು
ಸರಿಯೋ? ತಪ್ಪೋ?’’ ಎಂದು ಕೇಳಿದನು. 4ಅವರು ಉತ್ತರ
ಕೊಡಲಿಲ್ಲ. ಆಗ ಯೇಸು ಆ ಮನುಷ್ಯನ ಕೈ ಮುಟ್ಟಿ ವಾಸಿಮಾಡಿ
ಅವನನ್ನು ಕಳುಹಿಸಿಬಿಟ್ಟನು. 5ಯೇಸು ಫರಿಸಾಯರಿಗೂ
ಧರ್ಮೋಪದೇಶಕರಿಗೂ, ‘‘ಸಬ್ಬತ್ ದಿನದಲ್ಲಿ ನಿಮ್ಮ
ಮಗನಾಗಲಿ ನಿಮ್ಮ ದುಡಿಯುವ ಪಶುವಾಗಲಿ ಬಾವಿಗೆ ಬಿದ್ದರೆ,
ಆ ಕೂಡಲೇ ನೀವು ಬಾವಿಯಿಂದ ಮೇಲಕ್ಕೆ ಎತ್ತಿ ಬದುಕಿಸುತ್ತೀರಿ

---

**ಪ್ರಭುವಿನ … ಆಶೀರ್ವಾದ** ಕೀರ್ತನೆ 11:26

**ಜಲೋದರ** ಈ ರೋಗದಿಂದ ದೇಹ ಉಬ್ಬುತ್ತಾ ಹೋಗುವುದು.

ಎಂಬುದು ನಿಮಗೆ ಗೊತ್ತೇ ಇದೆ'' ಎಂದು ಹೇಳಿದನು.
6ಫರಿಸಾಯರಾಗಲಿ ಧರ್ಮೋಪದೇಶಕರಾಗಲಿ ಯೇಸುವಿನ ಈ
ಮಾತಿಗೆ ಉತ್ತರ ಕೊಡಲಾಗಲಿಲ್ಲ.

### ನಿನ್ನನ್ನು ಪ್ರಮುಖನನ್ನಾಗಿ ಮಾಡಿಕೊಳ್ಳಬೇಡ

7ಅತಿಥಿಗಳಾಗಿ ಬಂದಿದ್ದ ಕೆಲವರು ಊಟಕ್ಕೆ ಕುಳಿತು
ಕೊಳ್ಳಲು ಉತ್ತಮವಾದ ಸ್ಥಳಗಳನ್ನು ಆರಿಸಿಕೊಳ್ಳುತ್ತಿರುವುದನ್ನು
ಕಂಡ ಯೇಸು ಈ ಸಾಮ್ಯವನ್ನು ಹೇಳಿದನು: 8''ಒಬ್ಬನು ನಿನ್ನನ್ನು
ಮದುವೆಗೆ ಆಮಂತ್ರಿಸಿದರೆ, ಉನ್ನತವಾದ ಆಸನದಲ್ಲಿ ಕುಳಿತು
ಕೊಳ್ಳಬೇಡ. ಅವನು ನಿನಗಿಂತಲೂ ಪ್ರಮುಖನಾದವನನ್ನು
ಆಮಂತ್ರಿಸಿದ್ದಿರಬಹುದು. 9ನೀನು ಉನ್ನತವಾದ ಸ್ಥಳದಲ್ಲಿ
ಕುಳಿತುಕೊಂಡಿದ್ದರೆ, ನಿನಗೆ ಆಮಂತ್ರಣ ನೀಡಿರುವವನು
ಬಂದು, 'ಈ ಸ್ಥಳವನ್ನು ಇವನಿಗೆ ಬಿಟ್ಟುಕೊಡು' ಎಂದು ನಿನಗೆ
ಹೇಳಬಹುದು. ಆಗ ನೀನು ನಾಚಿಕೆಯಿಂದ ಕೊನೆಯ ಸ್ಥಳದಲ್ಲಿ
ಕುಳಿತುಕೊಳ್ಳಬೇಕಾಗುವುದು. 10ಆದ್ದರಿಂದ ಒಬ್ಬನು ನಿನ್ನನ್ನು
ಆಮಂತ್ರಿಸುವಾಗ, ಕೊನೆಯ ಸ್ಥಳದಲ್ಲಿ ಹೋಗಿ ಕುಳಿತುಕೊ.
ಆಗ ನಿನ್ನನ್ನು ಆಮಂತ್ರಿಸಿದ ವ್ಯಕ್ತಿಯು ಬಂದು, 'ಸ್ನೇಹಿತನೇ,
ಉನ್ನತವಾದ ಈ ಸ್ಥಳದಲ್ಲಿ ಕುಳಿತುಕೊ!' ಎಂದು ನಿನಗೆ
ಹೇಳುವನು. ಆಗ ನೆರೆದುಬಂದ ಅತಿಥಿಗಳೆಲ್ಲಾ ನಿನ್ನನ್ನು
ಗೌರವಿಸುವರು. 11ತನ್ನನ್ನು ಹೆಚ್ಚಿಸಿಕೊಳ್ಳುವ ಪ್ರತಿಯೊಬ್ಬನೂ
ತಗ್ಗಿಸಲ್ಪಡುವನು. ತನ್ನನ್ನು ತಗ್ಗಿಸಿಕೊಳ್ಳುವ ಪ್ರತಿಯೊಬ್ಬನೂ
ಹೆಚ್ಚಿಸಲ್ಪಡುವನು.''

### ನಿಮಗೆ ಪ್ರತಿಫಲ ದೊರೆಯುವುದು

12ಬಳಿಕ ಯೇಸು ತನ್ನನ್ನು ಆಮಂತ್ರಿಸಿದ ಫರಿಸಾಯನಿಗೆ,
''ನೀನು ಮಧ್ಯಾಹ್ನದ ಊಟಕ್ಕೆ ಅಥವಾ ರಾತ್ರಿಯ ಊಟಕ್ಕೆ ನಿನ್ನ
ಸ್ನೇಹಿತರನ್ನು, ಸಹೋದರರನ್ನು, ಸಂಬಂಧಿಕರನ್ನು ಮತ್ತು
ಶ್ರೀಮಂತರಾದ ನೆರೆಯವರನ್ನು ಆಮಂತ್ರಿಸಿದರೆ, ಅವರೂ
ನಿನ್ನನ್ನು ಮತ್ತೊಮ್ಮೆ ಊಟಕ್ಕೆ ಆಮಂತ್ರಿಸುವರು. ಆಗ ಅದೇ
ನಿನಗೆ ಪ್ರತಿಫಲವಾಗುವುದು. 13ಅದರ ಬದಲು, ನೀನು ಔತಣ
ಮಾಡಿಸುವಾಗ ಬಡಜನರನ್ನು, ಕುಂಟರನ್ನು ಮತ್ತು
ಕುರುಡರನ್ನು ಆಮಂತ್ರಿಸು. 14ಆಗ ನಿನಗೆ ಆಶೀರ್ವಾದ
ದೊರೆಯುವುದು. ಏಕೆಂದರೆ, ಈ ಜನರು ನಿನ್ನನ್ನು ಔತಣಕ್ಕೆ
ಆಮಂತ್ರಿಸಲಾರರು. ಅವರಲ್ಲಿ ಏನೂ ಇಲ್ಲ. ಆದರೆ,
ನೀತಿವಂತರು ಜೀವಂತವಾಗಿ ಎದ್ದುಬರುವಾಗ, ನಿನಗೆ ಪ್ರತಿಫಲ
ದೊರೆಯುವುದು'' ಎಂದು ಹೇಳಿದನು.

### ಔತಣ ಕೂಟದ ಸಾಮ್ಯ

(ಮತ್ತಾಯ 22:1-10)

15ಯೇಸುವಿನೊಡನೆ ಊಟಕ್ಕೆ ಕುಳಿತಿದ್ದವರಲ್ಲಿ ಒಬ್ಬನು ಈ
ವಿಷಯಗಳನ್ನು ಕೇಳಿ ಯೇಸುವಿಗೆ, ''ದೇವರ ರಾಜ್ಯದಲ್ಲಿ ಊಟ
ಮಾಡುವವರೇ ಧನ್ಯರು!'' ಎಂದನು. 16ಯೇಸು ಅವನಿಗೆ
ಹೇಳಿದ್ದೇನೆಂದರೆ: ''ಒಬ್ಬನು ಒಂದು ದೊಡ್ಡ ಔತಣವನ್ನು
ಮಾಡಿಸಿ ಅನೇಕ ಜನರನ್ನು ಆಮಂತ್ರಿಸಿದನು. 17ಊಟದ
ಸಮಯ ಬಂದಾಗ, ಅವನು ತನ್ನ ಸೇವಕನನ್ನು ಕಳುಹಿಸಿ,
'ಬನ್ನಿರಿ! ಊಟ ಸಿದ್ಧವಾಗಿದೆ' ಎಂದು ಅತಿಥಿಗಳಿಗೆ ತಿಳಿಸಿದನು.
18ಆದರೆ ಎಲ್ಲಾ ಅತಿಥಿಗಳು ತಾವು ಬರಲಾಗುವುದಿಲ್ಲವೆಂದು
ಹೇಳಿದರು. ಪ್ರತಿಯೊಬ್ಬನೂ ಒಂದೊಂದು ನೆವ ಹೇಳಿದನು.
ಮೊದಲನೆಯವನು, 'ನಾನು ಇದೀಗ ಒಂದು ಹೊಲವನ್ನು
ಕ್ರಯಕ್ಕೆ ತೆಗೆದುಕೊಂಡಿದ್ದೇನೆ. ಆದ್ದರಿಂದ ನಾನು ಹೋಗಿ
ಅದನ್ನು ನೋಡಬೇಕು. ದಯಮಾಡಿ ಕ್ಷಮಿಸು' ಎಂದು
ಹೇಳಿದನು. 19ಎರಡನೆಯವನು, 'ನಾನು ಇದೀಗ ಐದು ಜೊತೆ
ಎತ್ತುಗಳನ್ನು ಕ್ರಯಕ್ಕೆ ತೆಗೆದುಕೊಂಡಿದ್ದೇನೆ. ನಾನು ಹೋಗಿ
ಅವುಗಳನ್ನು ಪರೀಕ್ಷಿಸಬೇಕು. ದಯಮಾಡಿ ಕ್ಷಮಿಸು' ಎಂದು
ಹೇಳಿದನು. 20ಮೂರನೆಯವನು, 'ನಾನು ಇದೀಗ ಮದುವೆ
ಯಾಗಿದ್ದೇನೆ, ನಾನು ಬರಲಾರೆ' ಎಂದನು. 21ಆದ್ದರಿಂದ ಆ
ಸೇವಕನು ಹಿಂತಿರುಗಿ ಹೋಗಿ ಅವರು ಹೇಳಿದ್ದನ್ನೆಲ್ಲ ತನ್ನ
ಯಜಮಾನನಿಗೆ ತಿಳಿಸಿದನು. ಆಗ ಯಜಮಾನನು ಬಹಳ
ಕೋಪಗೊಂಡು ಆ ಸೇವಕನಿಗೆ, 'ಈ ಊರಿನ ಬೀದಿಗಳಿಗೂ
ಸಂದುಗಳಿಗೂ ಬೇಗನೆ ಹೋಗಿ ಬಡವರನ್ನೂ ಅಂಗವಿಕಲ
ರನ್ನೂ ಕುರುಡರನ್ನೂ ಕುಂಟರನ್ನೂ ಇಲ್ಲಿಗೆ ಕರೆದುಕೊಂಡು
ಬಾ' ಎಂದು ಹೇಳಿದನು. 22ತರುವಾಯ ಆ ಸೇವಕನು ಬಂದು,
'ಸ್ವಾಮೀ, ನೀನು ಹೇಳಿದಂತೆಯೇ ಮಾಡಿದೆನು. ಆದರೆ ನಮ್ಮಲ್ಲಿ
ಇನ್ನೂ ಹೆಚ್ಚು ಜನರಿಗೆ ಸ್ಥಳವಿದೆ' ಎಂದು ಹೇಳಿದನು. 23ಆಗ
ಯಜಮಾನನು ಆ ಸೇವಕನಿಗೆ, 'ಹೆದ್ದಾರಿಗಳಿಗೂ ರಸ್ತೆಗಳಿಗೂ
ಹೋಗಿ, ಅಲ್ಲಿರುವ ಜನರನ್ನೆಲ್ಲಾ ಆಮಂತ್ರಿಸು. ನನ್ನ ಮನೆಯು
ಜನರಿಂದ ತುಂಬಿಹೋಗಬೇಕೆಂಬುದೇ ನನ್ನ ಅಪೇಕ್ಷೆ. 24ನಾನು
ಮೊದಲನೆ ಸಲ ಆಮಂತ್ರಿಸಿದ ಆ ಜನರಲ್ಲಿ ಒಬ್ಬರಾದರೂ
ನನ್ನೊಂದಿಗೆ ಊಟ ಮಾಡಕೂಡದು!' ಎಂದು ಹೇಳಿದನು.''

### ಯೋಜನೆಯ ಅಗತ್ಯತೆ

(ಮತ್ತಾಯ 10:37-38)

25ಅನೇಕ ಜನರು ಯೇಸುವಿನೊಂದಿಗೆ ಗುಂಪುಗುಂಪಾಗಿ
ಹೋಗುತ್ತಿದ್ದಾಗ ಆತನು ಅವರಿಗೆ ಇಂತೆಂದನು: 26''ನನ್ನ ಬಳಿಗೆ
ಬರುವವನು ನನ್ನನ್ನು ಪ್ರೀತಿಸುವುದಕ್ಕಿಂತಲೂ ಹೆಚ್ಚಾಗಿ ತನ್ನ
ತಂದೆತಾಯಿಗಳನ್ನು, ಹೆಂಡತಿಯನ್ನು, ಮಕ್ಕಳನ್ನು, ಸಹೋದರ
ಸಹೋದರಿಯರನ್ನು ಮತ್ತು ತನ್ನನ್ನು ಪ್ರೀತಿಸುವುದಾದರೆ,
ಅವನು ನನ್ನ ಶಿಷ್ಯನಾಗಿರಲು ಸಾಧ್ಯವಿಲ್ಲ. 27ನನ್ನನ್ನು
ಹಿಂಬಾಲಿಸುವವನು ತನಗೆ ಕೊಡಲ್ಪಟ್ಟಿರುವ ಶಿಲುಬೆಯನ್ನು
(ಶ್ರಮೆ) ಹೊತ್ತುಕೊಂಡು ಹೋಗದಿದ್ದರೆ, ಅವನು ನನ್ನ ಶಿಷ್ಯ
ನಾಗಿರಲು ಸಾಧ್ಯವಿಲ್ಲ. 28ನೀನು ಒಂದು ಕಟ್ಟಡವನ್ನು
ಕಟ್ಟಬೇಕೆಂದಿದ್ದರೆ ಮೊದಲು ನೀನು ಕುಳಿತುಕೊಂಡು ಅದಕ್ಕೆ
ಎಷ್ಟು ಖರ್ಚಾಗುತ್ತದೆ ಎಂಬುದನ್ನು ಆಲೋಚಿಸು. ಆ
ಕಟ್ಟಡವನ್ನು ಪೂರೈಸಲು ನಿನ್ನಲ್ಲಿ ಸಾಕಷ್ಟು ಹಣವಿದೆಯೋ
ಎಂದು ಲೆಕ್ಕಹಾಕಿ ನೋಡು. 29ಇಲ್ಲವಾದರೆ, ನೀನು ಕಟ್ಟಡದ
ಕೆಲಸವನ್ನು ಪ್ರಾರಂಭಿಸಿದರೂ ಅದನ್ನು ಪೂರೈಸಲು ಸಾಧ್ಯ
ವಾಗುವುದಿಲ್ಲ. ಜನರು ನಿನ್ನನ್ನು ನೋಡಿ, 30'ಇವನು ಈ
ಕಟ್ಟಡದ ಕೆಲಸವನ್ನು ಪ್ರಾರಂಭಿಸಿದನು, ಆದರೆ ಪೂರೈಸಲು
ಅವನಿಂದಾಗಲಿಲ್ಲ' ಎಂದು ಗೇಲಿಮಾಡುವರು. 31''ಒಬ್ಬ
ಅರಸನು ಇನ್ನೊಬ್ಬ ಅರಸನ ವಿರುದ್ಧ ಯುದ್ಧಕ್ಕೆ ಹೋಗುವಾಗ,
ಮೊದಲು ಅವನು ಕುಳಿತುಕೊಂಡು, ಯೋಜನೆ ಮಾಡುವನು.
ಅರಸನ ಬಳಿಯಲ್ಲಿ ಕೇವಲ ಹತ್ತು ಸಾವಿರ ಮಂದಿ ಸೈನಿಕರಿದ್ದರೆ,
ಇಪ್ಪತ್ತು ಸಾವಿರ ಮಂದಿ ಸೈನಿಕರಿರುವ ಇನ್ನೊಬ್ಬ ಅರಸನನ್ನು
ಸೋಲಿಸಲು ತನಗೆ ಸಾಧ್ಯವೇ ಎಂದು ಆಲೋಚಿಸುವನು.
32ಅವನು ಇನ್ನೊಬ್ಬ ಅರಸನನ್ನು ಸೋಲಿಸಲಾಗದಿದ್ದರೆ, ತನ್ನ
ರಾಯಭಾರಿಗಳನ್ನು ಕಳುಹಿಸಿ, ಶಾಂತಿ ಒಪ್ಪಂದಕ್ಕಾಗಿ ಕೇಳಿ

ಕೊಳ್ಳುವನು. 33ಅದೇ ರೀತಿಯಲ್ಲಿ ನೀವೆಲ್ಲರೂ ಮೊದಲು
ಯೋಜನೆ ಮಾಡಬೇಕು. ನೀವು ನನ್ನನ್ನು ಹಿಂಬಾಲಿಸ
ಬೇಕೆಂದಿದ್ದರೆ ನಿಮ್ಮಲ್ಲಿರುವ ಪ್ರತಿಯೊಂದನ್ನೂ ತ್ಯಜಿಸಿ
ಬಿಡಬೇಕು. ಇಲ್ಲವಾದರೆ, ಶಿಷ್ಯರಾಗಲು ಸಾಧ್ಯವಿಲ್ಲ!

## ನಿಮ್ಮ ಪ್ರಭಾವವನ್ನು ಕಳೆದುಕೊಳ್ಳಬೇಡಿರಿ

(ಮತ್ತಾಯ 5:13; ಮಾರ್ಕ 9:50)

34“ಉಪ್ಪು ಒಳ್ಳೆಯ ಪದಾರ್ಥ. ಆದರೆ ಉಪ್ಪು ತನ್ನ ರುಚಿ
ಕಳೆದುಕೊಂಡರೆ ಅದಕ್ಕೆ ಯಾವ ಬೆಲೆಯೂ ಇಲ್ಲ. ನೀವು ಅದಕ್ಕೆ
ಮತ್ತೆ ಉಪ್ಪಿನ ರುಚಿಯನ್ನು ಕೊಡಲು ಸಾಧ್ಯವಿಲ್ಲ. 35ಅದರಿಂದ
ಮಣ್ಣಿಗಾಗಲಿ ಗೊಬ್ಬರಕ್ಕಾಗಲಿ ಪ್ರಯೋಜನವಿಲ್ಲ. ಜನರು
ಅದನ್ನು ಹೊರಗೆ ಬಿಸಾಡುತ್ತಾರೆ. ನನ್ನ ಮಾತನ್ನು ಕೇಳುವ
ಜನರೇ, ಆಲಿಸಿರಿ!”

## ಸ್ವರ್ಗದಲ್ಲಿ ಆನಂದ

(ಮತ್ತಾಯ 18:12-14)

15 ಅನೇಕ ಸುಂಕ ವಸೂಲಿಗಾರರು ಮತ್ತು ಪಾಪಿಗಳು
ಯೇಸುವಿನ ಉಪದೇಶವನ್ನು ಕೇಳಲು ಬಂದಿದ್ದರು.
2ಆಗ ಫರಿಸಾಯರು ಮತ್ತು ಧರ್ಮೋಪದೇಶಕರು,
“ನೋಡಿರಿ! ಈ ಮನುಷ್ಯನು (ಯೇಸು) ಪಾಪಿಗಳನ್ನು ಬರ
ಮಾಡಿಕೊಳ್ಳುತ್ತಾನೆ; ಅವರ ಜೊತೆಯಲ್ಲಿ ಊಟಮಾಡು
ತ್ತಾನೆ!” ಎಂದು ದೂರು ಹೇಳತೊಡಗಿದರು.
3ಆಗ ಯೇಸು ಅವರಿಗೆ ಈ ಸಾಮ್ಯವನ್ನು ಹೇಳಿದನು:
4“ನಿಮ್ಮಲ್ಲಿ ಒಬ್ಬನಿಗೆ ನೂರು ಕುರಿಗಳಿವೆ ಎಂದು
ತಿಳಿದುಕೊಳ್ಳೋಣ. ಆ ಕುರಿಗಳಲ್ಲಿ ಒಂದು ಕಳೆದುಹೋದರೆ,
ಅವನು ಉಳಿದ ತೊಂಭತ್ತೊಂಭತ್ತು ಕುರಿಗಳನ್ನು ಅಲ್ಲೇ ಬಿಟ್ಟು
ಕಳೆದುಹೋದ ಒಂದು ಕುರಿಗೋಸ್ಕರ ಹುಡುಕುತ್ತಾ
ಹೋಗುವನು. ಆ ಕುರಿಯು ಸಿಕ್ಕುವ ತನಕ ಅವನು ಅದಕ್ಕಾಗಿ
ಹುಡುಕುತ್ತಲೇ ಇರುವನು. 5ಅವನು ಆ ಕುರಿಯನ್ನು
ಕಂಡುಕೊಂಡಾಗ, ಬಹು ಸಂತೋಷಪಡುವನು. ಅವನು ಆ
ಕುರಿಯನ್ನು ತನ್ನ ಮನೆಗೆ ಹೊತ್ತುಕೊಂಡು ಹೋಗುವನು.
6ಅವನು ತನ್ನ ಸ್ನೇಹಿತರ ಮತ್ತು ನೆರೆಹೊರೆಯವರ ಬಳಿಗೆ
ಹೋಗಿ, ‘ನನ್ನೊಡನೆ ಸಂತೋಷಪಡಿರಿ, ಕಳೆದುಹೋದ ನನ್ನ
ಕುರಿ ಸಿಕ್ಕಿತು’ ಎಂದು ಹೇಳುವನು. 7ಅದೇ ರೀತಿಯಲ್ಲಿ ಒಬ್ಬ
ಪಾಪಿ ತನ್ನ ಹೃದಯವನ್ನು ಪರಿವರ್ತಿಸಿಕೊಂಡಾಗ ಸ್ವರ್ಗದಲ್ಲಿ
ಬಹಳ ಸಂತೋಷವಾಗುತ್ತದೆ ಎಂದು ನಾನು ನಿಮಗೆ ಹೇಳು
ತ್ತೇನೆ. ತಮ್ಮ ಹೃದಯಗಳನ್ನು ಪರಿವರ್ತಿಸಲು ಅವಶ್ಯವಿಲ್ಲದ
ತೊಂಭತ್ತೊಂಭತ್ತು ಒಳ್ಳೆಯ ಜನರಿಗಿಂತ ಆ ಒಬ್ಬ ಪಾಪಿಯ
ವಿಷಯದಲ್ಲಿ ಹೆಚ್ಚು ಸಂತೋಷವಾಗುತ್ತದೆ.
8“ಒಬ್ಬ ಸ್ತ್ರೀಯ ಬಳಿ ಹತ್ತು ಬೆಳ್ಳಿ ನಾಣ್ಯಗಳು ಇವೆಯೆಂದು
ಭಾವಿಸಿಕೊಳ್ಳಿರಿ. ಆಕೆಯು ಅವುಗಳಲ್ಲಿ ಒಂದನ್ನು ಕಳೆದು
ಕೊಳ್ಳುತ್ತಾಳೆ. ಆಕೆ ದೀಪವನ್ನು ತಂದು ಮನೆಯನ್ನು ಗುಡಿಸು
ತ್ತಾಳೆ. ಆ ನಾಣ್ಯವು ಸಿಕ್ಕುವ ತನಕ ಆಕೆ ಎಚ್ಚರಿಕೆಯಿಂದ ಹುಡುಕು
ತ್ತಾಳೆ. 9ಕಳೆದು ಹೋದ ಆ ನಾಣ್ಯ ಸಿಕ್ಕಿದಾಗ ಆಕೆ ತನ್ನ
ಸ್ನೇಹಿತರನ್ನೂ ನೆರೆಹೊರೆಯವರನ್ನೂ ಕರೆದು, ‘ನನ್ನೊಡನೆ
ಸಂತೋಷಪಡಿರಿ. ಕಳೆದುಹೋಗಿದ್ದ ನನ್ನ ನಾಣ್ಯ ಸಿಕ್ಕಿತು’ ಎಂದು
ಹೇಳುವಳು. 10ಅದೇ ರೀತಿ, ಒಬ್ಬ ಪಾಪಿ ಪಶ್ಚಾತ್ತಾಪಪಟ್ಟು
ದೇವರ ಕಡೆಗೆ ತಿರುಗಿಕೊಳ್ಳುವಾಗ ದೇವದೂತರ ಮುಂದೆ
ಸಂತೋಷವಾಗುವುದು.”

## ಮನೆ ಬಿಟ್ಟುಹೋದ ಮಗನು

11ಬಳಿಕ ಯೇಸು ಇಂತೆಂದನು: “ಒಬ್ಬ ಮನುಷ್ಯನಿಗೆ
ಇಬ್ಬರು ಗಂಡುಮಕ್ಕಳಿದ್ದರು. 12ಕಿರಿಯ ಮಗನು ತಂದೆಗೆ, ‘ನಿನ್ನ
ಆಸ್ತಿಯಲ್ಲಿ ನನಗೆ ಬರಬೇಕಾದ ಪಾಲನ್ನು ಕೊಡು’ ಎಂದು
ಕೇಳಿದನು. ಆದ್ದರಿಂದ ತಂದೆಯು ತನ್ನ ಆಸ್ತಿಯನ್ನು ಹಂಚಿ
ಕೊಟ್ಟನು. 13ಆಗ ಕಿರಿಮಗನು ತನಗೆ ದೊರೆತ ಪಾಲನ್ನೆಲ್ಲಾ
ಕೂಡಿಸಿಕೊಂಡು ದೂರದೇಶಕ್ಕೆ ಪ್ರಯಾಣಮಾಡಿದನು. ಅಲ್ಲಿ
ಅವನು ಪಟಿಂಗನಾಗಿ ಬದುಕಿ ತನ್ನ ಹಣವನ್ನೆಲ್ಲಾ ಹಾಳುಮಾಡಿ
ಕೊಂಡನು. 14ಸ್ವಲ್ಪಕಾಲದ ನಂತರ, ಆ ದೇಶದಲ್ಲಿ ಕ್ಷಾಮ
ಉಂಟಾಯಿತು. ಅಲ್ಲಿ ಮಳೆ ಬೀಳಲಿಲ್ಲ. ಆ ದೇಶದ ಯಾವ
ಭಾಗದಲ್ಲಿಯೂ ಸಾಕಷ್ಟು ಆಹಾರವಿರಲಿಲ್ಲ. ಅವನು ಬಹಳ
ಹಸಿವೆಗೊಂಡಿದ್ದನು. ಅವನಿಗೆ ಹಣದ ಅಗತ್ಯತೆಯಿತ್ತು. 15ಆದ್ದ
ರಿಂದ ಅವನು ಆ ದೇಶದ ನಿವಾಸಿಯೊಬ್ಬನ ಬಳಿ ಕೂಲಿಕೆಲಸಕ್ಕೆ
ಸೇರಿಕೊಂಡನು. ಆ ಮನುಷ್ಯನು ಹಂದಿ ಮೇಯಿಸುವುದಕ್ಕಾಗಿ
ಅವನನ್ನು ಹೊಲಕ್ಕೆ ಕಳುಹಿಸಿದನು. 16ಆಗ ಅವನು ಬಹಳ
ಹಸಿವೆಗೊಂಡಿದ್ದನು. ಆದ್ದರಿಂದ ಹಂದಿಗಳು ತಿನ್ನುತ್ತಿದ್ದ ಕಾಯಿ
ಗಳನ್ನೇ ತಿನ್ನಲು ಹಂಬಲಿಸಿದನು. ಆದರೆ ಅದನ್ನೂ ಅವನಿಗೆ
ಯಾರೂ ಕೊಡಲಿಲ್ಲ. 17ಆಗ ಅವನಿಗೆ ತಾನು ಮಾಡಿದ ಬುದ್ಧಿ
ಹೀನ ಕಾರ್ಯದ ಅರಿವಾಯಿತು. ಅವನು ತನ್ನೊಳಗೆ, ‘ನನ್ನ
ತಂದೆಯ ಬಳಿಯಲ್ಲಿರುವ ಸೇವಕರಿಗೆ ಬೇಕಾದಷ್ಟು ಆಹಾರ
ವಿದೆ. ನಾನಾದರೋ ಇಲ್ಲಿ ಊಟವಿಲ್ಲದೆ ಸಾಯುತ್ತಿದ್ದೇನೆ.
18ನಾನು ಇಲ್ಲಿಂದ ನನ್ನ ತಂದೆಯ ಬಳಿಗೆ ಹೊರಟು
ಹೋಗುತ್ತೇನೆ. ನಾನು ನನ್ನ ತಂದೆಗೆ, ‘ಅಪ್ಪಾ, ನಾನು ದೇವರಿಗೆ
ವಿರೋಧವಾಗಿಯೂ ನಿನಗೆ ವಿರೋಧವಾಗಿಯೂ ಪಾಪಮಾಡಿ
ದ್ದೇನೆ. 19ನಿನ್ನ ಮಗನೆಂದು ಕರೆಸಿಕೊಳ್ಳುವುದಕ್ಕೆ ನಾನು ಯೋಗ್ಯ
ನಲ್ಲ. ನೀನು ನನ್ನನ್ನು ನಿನ್ನ ಸೇವಕರಲ್ಲಿ ಒಬ್ಬನನ್ನಾಗಿ ಸೇರಿಸಿಕೊ
ಎಂದು ಹೇಳುವೆನು’ ಅಂದುಕೊಂಡನು. 20ಅಂತೆಯೇ ಅವನು
ಹೊರಟು ತನ್ನ ತಂದೆಯ ಬಳಿಗೆ ಹೋದನು.

## ಕಿರಿಮಗನು ಹಿಂತಿರುಗಿದನು

“ಮಗನು ಇನ್ನೂ ಬಹುದೂರದಲ್ಲಿ ಬರುತ್ತಿರುವಾಗಲೇ
ತಂದೆಯು ಅವನನ್ನು ಗುರುತಿಸಿ ಕನಿಕರದಿಂದ ಅವನ ಬಳಿಗೆ
ಓಡಿಬಂದು ಅವನನ್ನು ಅಪ್ಪಿಕೊಂಡು ಮುದ್ದಿಟ್ಟನು. 21ಮಗನು
ತನ್ನ ತಂದೆಗೆ, ‘ಅಪ್ಪಾ, ನಾನು ದೇವರಿಗೆ ವಿರೋಧವಾಗಿಯೂ
ನಿನಗೆ ವಿರೋಧವಾಗಿಯೂ ಪಾಪಮಾಡಿದ್ದೇನೆ. ನಿನ್ನ ಮಗ
ನೆಂದು ಕರೆಸಿಕೊಳ್ಳುವುದಕ್ಕೆ ನಾನು ಯೋಗ್ಯನಲ್ಲ’ ಎಂದು ಹೇಳಿ
ದನು. 22ಆದರೆ ತಂದೆಯು ತನ್ನ ಸೇವಕರಿಗೆ, ‘ತ್ವರೆ ಮಾಡಿರಿ!
ಉತ್ತಮವಾದ ಉಡುಪುಗಳನ್ನು ತಂದು ಇವನಿಗೆ ತೊಡಿಸಿರಿ.
ಇವನ ಬೆರಳಿಗೆ ಉಂಗುರವನ್ನು ಹಾಕಿರಿ. ಪಾದಗಳಿಗೆ ಒಳ್ಳೆಯ
ಪಾದರಕ್ಷೆಗಳನ್ನು ತೊಡಿಸಿರಿ. 23ಕೊಬ್ಬಿದ ಕರುವನ್ನು ಕೊಯ್ದು
ಉಲ್ಲಾಸಪಡೋಣ. 24ನನ್ನ ಮಗನು ಸತ್ತುಹೋಗಿದ್ದನು, ಈಗ
ಲಾದರೂ ಮತ್ತೆ ಜೀವಂತನಾಗಿ ಬಂದಿದ್ದಾನೆ! ಇವನು ತಪ್ಪಿ
ಹೋಗಿದ್ದನು, ಈಗಲಾದರೂ ಮತ್ತೆ ಸಿಕ್ಕಿದ್ದಾನೆ!’ ಎಂದು ಹೇಳಿ
ದನು. ಆದ್ದರಿಂದ ಅವರು ಉಲ್ಲಾಸ ಪಡುವುದಕ್ಕೆ ತೊಡಗಿದರು.

### ಹಿರಿಮಗನು ಬಂದನು

25“ಹಿರಿಯ ಮಗನು ಹೊಲದಲ್ಲಿದ್ದನು. ಅವನು ಮನೆಗೆ
ಬರುತ್ತಿದ್ದಾಗ ವಾದ್ಯಗೋಷ್ಠಿಯ ಮತ್ತು ನೃತ್ಯದ ಶಬ್ದವನ್ನು
ಕೇಳಿದನು. 26ಆದ್ದರಿಂದ ಅವನು ತನ್ನ ಸೇವಕರಲ್ಲಿ ಒಬ್ಬನನ್ನು
ಕರೆದು, ‘ಇದೇನು?’ ಎಂದು ವಿಚಾರಿಸಿದನು. 27ಆ ಸೇವಕನು,
‘ನಿನ್ನ ತಮ್ಮನು ಮರಳಿ ಬಂದಿದ್ದಾನೆ. ನಿನ್ನ ತಂದೆಯು ಕೊಬ್ಬಿದ
ಕರುವನ್ನು ಕೊಯ್ಸಿದ್ದಾನೆ. ನಿನ್ನ ತಮ್ಮನು ಮನೆಗೆ ಸುರಕ್ಷಿತವಾಗಿ
ಬಂದದ್ದಕ್ಕಾಗಿ ನಿನ್ನ ತಂದೆಯು ಸಂತೋಷಗೊಂಡಿದ್ದಾನೆ!’
ಎಂದು ಹೇಳಿದನು. 28ಆಗ ಹಿರಿಯ ಮಗನು ಕೋಪಗೊಂಡು
ಔತಣಕೂಟಕ್ಕೆ ಹೋಗಲಿಲ್ಲ. ಆಗ ಅವನ ತಂದೆ ಹೊರಗೆ ಬಂದು
ಅವನನ್ನು ಒಳಗೆ ಕರೆದನು. 29ಹಿರಿಮಗನು ತಂದೆಗೆ, ‘ನಾನು
ಗುಲಾಮನಂತೆ ನಿನಗೆ ಅನೇಕ ವರ್ಷಗಳವರೆಗೆ ಸೇವೆ ಮಾಡಿ
ದೆನು! ನಾನು ಯಾವಾಗಲೂ ನಿನ್ನ ಅಪ್ಪಣೆಗಳಿಗೆ ವಿಧೇಯ
ನಾದೆನು. ಆದರೆ ನೀನು ನನಗೋಸ್ಕರ ಎಂದಾದರೂ ಒಂದು
ಆಡನ್ನಾಗಲೀ ಕೊಯ್ಯಲಿಲ್ಲ. ನನಗಾಗಿ ಮತ್ತು ನನ್ನ ಸ್ನೇಹಿತರಿ
ಗಾಗಿ ನೀನೆಂದೂ ಒಂದು ಔತಣಕೂಟವನ್ನು ಏರ್ಪಡಿಸಲಿಲ್ಲ.
30ಆದರೆ ನಿನ್ನ ಕಿರಿಯ ಮಗನು ನಿನ್ನ ಎಲ್ಲ ಹಣವನ್ನು
ಸೂಳೆಯರಿಗೆ ಖರ್ಚುಮಾಡಿ ಮನೆಗೆ ಹಿಂತಿರುಗಿ ಬಂದಾಗ
ನೀನು ಅವನಿಗಾಗಿ ಕೊಬ್ಬಿದ ಕರುವನ್ನು ಕೊಯ್ಸಿದ್ದಿ!’ ಅಂದನು.
31ಆದರೆ ತಂದೆಯು ಅವನಿಗೆ, ‘ಮಗನೇ, ನೀನು ಯಾವಾಗಲೂ
ನನ್ನೊಂದಿಗೆ ಇರುತ್ತೀ. ನನಗಿರುವುದೆಲ್ಲಾ ನಿನ್ನದೇ. 32ನಾವು
ಸಂತೋಷಪಡಬೇಕು. ಉಲ್ಲಾಸಪಡಬೇಕು, ಏಕೆಂದರೆ ನಿನ್ನ
ತಮ್ಮನು ಸತ್ತುಹೋಗಿದ್ದನು, ಈಗಲಾದರೂ ಮತ್ತೆ ಜೀವಂತ
ವಾಗಿ ಬಂದಿದ್ದಾನೆ. ಅವನು ಕಳೆದುಹೋಗಿದ್ದನು, ಈಗ
ಲಾದರೊ ಮತ್ತೆ ಸಿಕ್ಕಿದ್ದಾನೆ’ ಅಂದನು.”

### ನಿಜವಾದ ಐಶ್ವರ್ಯ

16 ಯೇಸು ತನ್ನ ಶಿಷ್ಯರಿಗೆ ಇಂತೆಂದನು:
“ಒಂದಾನೊಂದು ಕಾಲದಲ್ಲಿ ಒಬ್ಬ ಐಶ್ವರ್ಯ
ವಂತನಿದ್ದನು. ಈ ಐಶ್ವರ್ಯವಂತನು ತನ್ನ ವ್ಯಾಪಾರವನ್ನು
ನೋಡಿಕೊಳ್ಳಲು ಒಬ್ಬ ಮೇಲ್ವಿಚಾರಕನನ್ನು ನೇಮಿಸಿದನು.
ಸ್ವಲ್ಪಕಾಲದ ನಂತರ, ಆ ಮೇಲ್ವಿಚಾರಕನು ತನಗೆ ಮೋಸ
ಮಾಡುತ್ತಿದ್ದಾನೆಂಬುದು ಐಶ್ವರ್ಯವಂತನಿಗೆ ತಿಳಿಯಿತು.
2ಆದ್ದರಿಂದ ಅವನು ಆ ಮೇಲ್ವಿಚಾರಕನನ್ನು ಕರೆದು, ‘ನಿನ್ನ ಬಗ್ಗೆ
ನನಗೆ ದೂರುಗಳು ಬಂದಿವೆ. ನನ್ನ ಹಣವನ್ನು ನೀನು
ಯಾವುದಕ್ಕಾಗಿ ಖರ್ಚು ಮಾಡಿರುವೆ? ನನಗೆ ವರದಿ ಒಪ್ಪಿಸು.
ಇನ್ನು ಮೇಲೆ ನನ್ನ ವ್ಯಾಪಾರಕ್ಕೆ ನೀನು ಮೇಲ್ವಿಚಾರಕನಾಗಿರಲು
ಸಾಧ್ಯವಿಲ್ಲ’ ಎಂದು ಹೇಳಿದನು. 3ಆಗ, ಆ ಮೇಲ್ವಿಚಾರಕನು
ತನ್ನೊಳಗೆ, ‘ಈಗ ನಾನೇನು ಮಾಡಲಿ? ನನ್ನ ಯಜಮಾನನು
ನನ್ನನ್ನು ಈ ಕೆಲಸದಿಂದ ತೆಗೆದುಬಿಡುತ್ತಾನೆ! ಗುಂಡಿಗಳನ್ನು
ಅಗೆಯುವುದಕ್ಕೂ ನನಗೆ ಬಲವಿಲ್ಲ. ಭಿಕ್ಷೆ ಬೇಡುವುದಕ್ಕೂ
ನನಗೆ ನಾಚಿಕೆ. 4ಈಗ ನಾನೇನು ಮಾಡಬೇಕೆಂಬುದು ನನಗೆ
ಗೊತ್ತಿದೆ! ನಾನು ಕೆಲಸವನ್ನು ಕಳೆದುಕೊಂಡ ಮೇಲೆ ಬೇರೆ
ಜನರು ನನ್ನನ್ನು ತಮ್ಮ ಮನೆಗಳಿಗೆ ಸೇರಿಸಿಕೊಳ್ಳುವಂಥ ಕಾರ್ಯ
ವೊಂದನ್ನು ನಾನು ಈಗ ಮಾಡುವೆ’ ಅಂದುಕೊಂಡನು.
5ಆಮೇಲೆ ಆ ಮೇಲ್ವಿಚಾರಕನು, ಯಜಮಾನನ ಸಾಲಗಾರರಲ್ಲಿ
ಪ್ರತಿಯೊಬ್ಬನನ್ನು ಕರೆದನು. ಅವನು ಮೊದಲನೆಯವನಿಗೆ,
‘ನೀನು ನನ್ನ ಯಜಮಾನನಿಗೆ ಎಷ್ಟು ಸಾಲ ಕೊಡಬೇಕು?’
ಎಂದು ಕೇಳಿದನು. 6ಅದಕ್ಕೆ ಮೊದಲನೆಯ ವ್ಯಕ್ತಿ, ‘ನಾನು
ಎಂಟು ಸಾವಿರ ಕಿಲೋ.ಗ್ರಾಂ. ಆಲಿವ್ ಎಣ್ಣೆ ಕೊಡಬೇಕು’
ಎಂದು ಉತ್ತರಿಸಿದನು. ಮೇಲ್ವಿಚಾರಕನು ಅವನಿಗೆ, ‘ನಿನ್ನ
ಲೆಕ್ಕಪತ್ರ ಇಲ್ಲಿದೆ. ಕುಳಿತುಕೊಂಡು ಬೇಗನೆ ಅದನ್ನು ಕಡಿಮೆ
ಮಾಡು. ನಾಲ್ಕು ಸಾವಿರ ಎಂದು ಬರೆ’ ಅಂದನು. 7ಬಳಿಕ ಆ
ಮೇಲ್ವಿಚಾರಕನು ಎರಡನೆಯವನಿಗೆ, ‘ನೀನು ನನ್ನ ಯಜಮಾನ
ನಿಗೆ ಎಷ್ಟು ಕೊಡಬೇಕಾಗಿದೆ?’ ಎಂದು ಕೇಳಿದನು. ಎರಡನೆ
ಯವನು, ‘ನಾನು ಅವನಿಗೆ ಅರವತ್ತು ಸಾವಿರ ಕಿಲೋ.ಗ್ರಾಂ.
ಗೋಧಿ ಕೊಡಬೇಕು’ ಎಂದು ಉತ್ತರಿಸಿದನು. ಆಗ ಆ
ಮೇಲ್ವಿಚಾರಕನು ಅವನಿಗೆ, ‘ನಿನ್ನ ಲೆಕ್ಕಪತ್ರ ಇಲ್ಲಿದೆ. ನೀನು
ಅದನ್ನು ಕಡಿಮೆ ಮಾಡು. ಐವತ್ತು ಸಾವಿರ ಎಂದು ಬರೆ’
ಅಂದನು. 8ಬಳಿಕ ಯಜಮಾನನು ಮೋಸಗಾರನಾದ ಮೇಲ್ವಿ
ಚಾರಕನಿಗೆ, ‘ನೀನು ಜಾಣತನ ಮಾಡಿದೆ’ ಎಂದು ಹೇಳಿದನು.
ಹೌದು, ಲೌಕಿಕ ಜನರು ತಮ್ಮ ಜನರೊಡನೆ ವ್ಯಾಪಾರದಲ್ಲಿ
ದೈವಿಕ ಜನರಿಗಿಂತಲೂ ಜಾಣರಾಗಿದ್ದಾರೆ.

9“ಈ ಲೋಕದಲ್ಲಿ ನೀವು ಹೊಂದಿರುವಂಥವುಗಳಿಂದ
ದೇವರಿಗೆ ಸ್ನೇಹಿತರನ್ನು ಮಾಡಿಕೊಡಿರಿ. ನೀವು ಹೀಗೆ ಮಾಡಿ
ದರೆ, ಈ ಲೋಕದವುಗಳು ನಿಮ್ಮ ಕೈಬಿಟ್ಟುಹೋದಾಗ ನಿಮ್ಮನ್ನು
ಶಾಶ್ವತದ ಮನೆಗೆ ಸ್ವೀಕರಿಸಿಕೊಳ್ಳಲಾಗುವುದು. 10ಸ್ವಲ್ಪವಾದ
ದ್ದರಲ್ಲಿ ನಂಬಿಗಸ್ತನಾಗಿರುವವನು ಬಹಳವಾದದ್ದರಲ್ಲಿಯೂ
ನಂಬಿಗಸ್ತನಾಗಿರುವನು. ಸ್ವಲ್ಪವಾದದ್ದರಲ್ಲಿ ಅನ್ಯಾಯಗಾರ
ನಾಗಿರುವವನು ಬಹಳವಾದದ್ದರಲ್ಲಿಯೂ ಅನ್ಯಾಯಗಾರ
ನಾಗಿರುವನು. 11ಲೌಕಿಕ ಐಶ್ವರ್ಯಗಳಲ್ಲಿ ನೀವು ನಂಬಿಗಸ್ತ
ರಾಗಿಲ್ಲದಿದ್ದರೆ, ಪರಲೋಕದ ಐಶ್ವರ್ಯಗಳಲ್ಲಿಯೂ ನೀವು
ನಂಬಿಗಸ್ತರಾಗಿರುವುದಿಲ್ಲ. 12ಮತ್ತೊಬ್ಬನ ಸ್ವತ್ತುಗಳಲ್ಲಿ ನೀವು
ನಂಬಿಗಸ್ತರಾಗಿಲ್ಲದಿದ್ದರೆ, ನಿಮ್ಮ ಸ್ವಂತ ಸ್ವತ್ತುಗಳನ್ನೇ ನಿಮಗೆ
ಯಾರೂ ಕೊಡುವುದಿಲ್ಲ. 13ಯಾವ ಸೇವಕನೂ ಒಂದೇ
ಸಮಯದಲ್ಲಿ ಇಬ್ಬರು ಯಜಮಾನರಿಗೆ ಸೇವೆ ಮಾಡಲಾರನು.
ಅವನು ಒಬ್ಬನನ್ನು ದ್ವೇಷಿಸಿ ಇನ್ನೊಬ್ಬನನ್ನು ಪ್ರೀತಿಸುವನು.
ಅಥವಾ ಒಬ್ಬನಿಗೆ ಹೊಂದಿಕೊಂಡು ಇನ್ನೊಬ್ಬನನ್ನು ತಾತ್ಸಾರ
ಮಾಡುವನು. ನೀವು ಒಂದೇ ಸಮಯದಲ್ಲಿ ದೇವರ ಮತ್ತು
ಹಣದ ಸೇವೆ ಮಾಡಲಾರಿರಿ.”

### ದೇವರ ಧರ್ಮಶಾಸ್ತ್ರ ಬದಲಾಗಲಾರದು

(ಮತ್ತಾಯ 11:12-13)

14ಫರಿಸಾಯರು ಈ ಎಲ್ಲಾ ಸಂಗತಿಗಳನ್ನು ಕೇಳುತ್ತಿದ್ದರು.
ಫರಿಸಾಯರೆಲ್ಲರು ಹಣದಾಸೆ ಉಳ್ಳವರಾಗಿದ್ದರಿಂದ, ಅವರು
ಯೇಸುವನ್ನು ಟೀಕಿಸಿದರು. 15ಯೇಸು ಫರಿಸಾಯರಿಗೆ
ಇಂತೆಂದನು, “ನೀವು ಜನರ ಮುಂದೆ ನಿಮ್ಮನ್ನು ಒಳ್ಳೆಯವ
ರೆಂದು ತೋರಿಸಿಕೊಳ್ಳುತ್ತೀರಿ. ಆದರೆ ನಿಜವಾಗಿಯೂ ನಿಮ್ಮ
ಹೃದಯದಲ್ಲಿರುವುದು ದೇವರಿಗೆ ಗೊತ್ತು. ಜನರ ದೃಷ್ಟಿಯಲ್ಲಿ
ಅಮೂಲ್ಯವಾದುವುಗಳು ದೇವರ ದೃಷ್ಟಿಯಲ್ಲಿ ಅಸಹ್ಯವಾಗಿವೆ.

16“ಜನರು ಮೋಶೆಯ ಧರ್ಮಶಾಸ್ತ್ರಕ್ಕೂ ಪ್ರವಾದಿಗಳ
ಗ್ರಂಥಗಳಿಗೂ ಅನುಸಾರವಾಗಿ ಜೀವಿಸಬೇಕೆಂಬುದು ದೇವರ
ಅಪೇಕ್ಷೆಯಾಗಿತ್ತು. ಸ್ನಾನಿಕ ಯೋಹಾನನು ಬಂದಕಾಲದಿಂದ
ದೇವರ ರಾಜ್ಯದ ಸುವಾರ್ತೆಯು ತಿಳಿಸಲ್ಪಡುತ್ತಿದೆ. ಅನೇಕ
ಜನರು ದೇವರ ರಾಜ್ಯದೊಳಗೆ ಹೋಗಲು ಬಹಳ ಪ್ರಯಾಸ

ಪಡುತ್ತಿದ್ದಾರೆ. 17ಧರ್ಮಶಾಸ್ತ್ರದಲ್ಲಿರುವ ಒಂದು ಚುಕ್ಕೆಯು
ಬದಲಾಗುವುದಕ್ಕಿಂತಲೂ ಭೂಮ್ಯಾಕಾಶಗಳು ಅಳಿದು
ಹೋಗುವುದು ಸುಲಭ.

### ವಿವಾಹ ವಿಚ್ಛೇದನ ಮತ್ತು ಪುನರ್ ವಿವಾಹ

18‘‘ತನ್ನ ಪತ್ನಿಯನ್ನು ಬಿಟ್ಟು ಮತ್ತೊಬ್ಬಳನ್ನು ಮದುವೆ
ಆಗುವವನು ವ್ಯಭಿಚಾರ ಮಾಡಿದವನಾಗುತ್ತಾನೆ. ವಿವಾಹ
ವಿಚ್ಛೇದನ ಹೊಂದಿದ ಸ್ತ್ರೀಯನ್ನು ಮದುವೆ ಆಗುವವನು ಸಹ
ವ್ಯಭಿಚಾರ ಮಾಡಿದವನಾಗುತ್ತಾನೆ.’’

### ಐಶ್ವರ್ಯವಂತನು ಮತ್ತು ಲಾಜರನು

19ಯೇಸು ಇಂತೆಂದನು: ‘‘ಒಬ್ಬ ಐಶ್ವರ್ಯವಂತನಿದ್ದನು.
ಅವನು ಯಾವಾಗಲೂ ಉತ್ತಮವಾದ ಉಡುಪುಗಳನ್ನು
ಧರಿಸುತ್ತಿದ್ದನು. ಅವನು ಬಹಳ ಐಶ್ವರ್ಯವಂತನಾಗಿದ್ದು
ದರಿಂದ ಪ್ರತಿದಿನವೂ ವೈಭವದೊಡನೆ ಊಟ ಮಾಡುತ್ತಾ
ಸಂತೋಷಪಡುತ್ತಿದ್ದನು. 20ಅಲ್ಲಿ ಲಾಜರನೆಂಬ ಒಬ್ಬ ಬಡ
ಮನುಷ್ಯನೂ ಇದ್ದನು. ಅವನ ಮೈತುಂಬ ಹುಣ್ಣುಗಳಿದ್ದವು.
ಅವನು ಐಶ್ವರ್ಯವಂತನ ಮನೆಯ ಹೊರಬಾಗಿಲ ಬಳಿ ಬಿದ್ದು
ಕೊಂಡಿರುತ್ತಿದ್ದನು. 21ಐಶ್ವರ್ಯವಂತನು ಊಟ ಮಾಡಿದ
ಮೇಲೆ ಹೊರಗೆಸೆದ ಎಂಜಲನ್ನು ತಿನ್ನುವುದಕ್ಕಾಗಿ ಅಲ್ಲಿ
ಬಿದ್ದುಕೊಂಡಿರುತ್ತಿದ್ದನು. ನಾಯಿಗಳು ಬಂದು ಅವನ ಹುಣ್ಣು
ಗಳನ್ನು ನೆಕ್ಕುತ್ತಿದ್ದವು. 22ಸ್ವಲ್ಪ ಸಮಯದ ನಂತರ, ಲಾಜರನು
ಸತ್ತನು. ದೇವದೂತರು ಲಾಜರನನ್ನು ತೆಗೆದುಕೊಂಡು ಹೋಗಿ
ಅಬ್ರಹಾಮನ ಎದೆಗೆ ಒರಗಿಸಿದರು. ಒಂದು ದಿನ ಐಶ್ವರ್ಯ
ವಂತನೂ ಸತ್ತನು. ಅವನಿಗೆ ಸಮಾಧಿ ಮಾಡಲಾಯಿತು. 23ಆದರೆ
ಅವನು ಪಾತಾಳದಲ್ಲಿ ಬಹಳ ಯಾತನೆಪಡುತ್ತಾ ಬಹಳ
ದೂರದಲ್ಲಿ ಅಬ್ರಹಾಮನ ಎದೆಗೆ ಒರಗಿಕೊಂಡಿದ್ದ ಲಾಜರ
ನನ್ನು ನೋಡಿ, 24‘ತಂದೆಯಾದ ಅಬ್ರಹಾಮನೇ, ನನ್ನ ಮೇಲೆ
ಕರುಣೆ ತೋರು! ಲಾಜರನನ್ನು ನನ್ನ ಬಳಿಗೆ ಕಳುಹಿಸು. ಅವನು
ತನ್ನ ಬೆರಳನ್ನು ನೀರಿನಲ್ಲಿ ಅದ್ದಿ ನನ್ನ ನಾಲಿಗೆಯನ್ನು ತಣ್ಣಗೆ
ಮಾಡಲಿ. ನಾನು ಈ ಬೆಂಕಿಯಲ್ಲಿ ಯಾತನೆಪಡುತ್ತಿದ್ದೇನೆ!’
ಎಂದು ಬೇಡಿಕೊಂಡನು. 25ಅದಕ್ಕೆ ಅಬ್ರಹಾಮನು, ‘‘ಕಂದಾ,
ನಿನ್ನ ಜೀವಮಾನದ ದಿನಗಳು ನಿನಗೆ ನೆನಪಿಲ್ಲವೇ? ಅಲ್ಲಿ ನಿನಗೆ
ಎಲ್ಲ ಬಗೆಯ ಸುಖವಿತ್ತು. ಆದರೆ ಲಾಜರನಿಗಾದರೊ ಕಷ್ಟಗಳೇ
ತುಂಬಿಕೊಂಡಿದ್ದವು. ಆದ್ದರಿಂದ ಈಗ ಅವನು ಸುಖಪಡು
ತ್ತಿದ್ದಾನೆ. ನೀನು ಸಂಕಟಪಡುತ್ತಿರುವೆ. 26ಮಾತ್ರವಲ್ಲದೆ ನಿನಗೂ
ನಮಗೂ ಮಧ್ಯೆ ದೊಡ್ಡ ಡೊಂಗುರವಿದೆ. ಅಲ್ಲಿಗೆ ಬಂದು ನಿನಗೆ
ಸಹಾಯಮಾಡಲು ಯಾರಿಗೂ ಸಾಧ್ಯವಿಲ್ಲ . ಅಲ್ಲದೆ ಯಾರೂ
ಅಲ್ಲಿಂದ ಇಲ್ಲಿಗೆ ಬರಲು ಸಾಧ್ಯವಿಲ್ಲ’ ಎಂದು ಹೇಳಿದನು.
27ಐಶ್ವರ್ಯವಂತನು, ‘ಹಾಗಾದರೆ, ದಯಮಾಡಿ ಲಾಜರನನ್ನು
ಭೂಲೋಕದಲ್ಲಿರುವ ನನ್ನ ತಂದೆಯ ಮನೆಗೆ ಕಳುಹಿಸು!
28ನನಗೆ ಐದು ಮಂದಿ ಸಹೋದರರಿದ್ದಾರೆ. ಅವರು ಈ
ಯಾತನೆಯ ಸ್ಥಳಕ್ಕೆ ಬಾರದಂತೆ ಲಾಜರನು ಅವರನ್ನು
ಎಚ್ಚರಿಸಲಿ’ ಎಂದು ಹೇಳಿದನು. 29ಅದಕ್ಕೆ ಅಬ್ರಹಾಮನು,
‘ಮೋಶೆಯ ಧರ್ಮಶಾಸ್ತ್ರ ಮತ್ತು ಪ್ರವಾದಿಗಳ ಗ್ರಂಥಗಳು
ಅವರಲ್ಲಿ ಇವೆ. ಅವರು ಅವುಗಳನ್ನು ಓದಿ ಕಲಿತುಕೊಳ್ಳಲಿ’
ಅಂದನು. 30ಅದಕ್ಕೆ ಐಶ್ವರ್ಯವಂತನು, ‘ತಂದೆಯಾದ
ಅಬ್ರಹಾಮನೇ, ಹಾಗೆನ್ನಬೇಡ! ಯಾರಾದರೊಬ್ಬರು ಸತ್ತವ
ರೊಳಗಿಂದ ಎದ್ದುಹೋದರೆ, ಅವರು ತಮ್ಮ ಹೃದಯಗಳನ್ನೂ
ಜೀವಿತಗಳನ್ನೂ ಮಾರ್ಪಡಿಸಿಕೊಳ್ಳುವರು’ ಎಂದು ಹೇಳಿದನು.
31ಅದಕ್ಕೆ ಅಬ್ರಹಾಮನು ಅವನಿಗೆ, ‘ಇಲ್ಲ! ನಿನ್ನ ಸಹೋದರರು
ಮೋಶೆಯ ಮತ್ತು ಪ್ರವಾದಿಗಳ ನುಡಿಗಳನ್ನು ಕೇಳುವುದಿಲ್ಲ
ವಾದರೆ, ಸತ್ತವರೊಳಗಿಂದ ಜೀವಿತನಾಗಿ ಎದ್ದು ಬಂದವನ
ಮಾತನ್ನೂ ಅವರು ಕೇಳುವುದಿಲ್ಲ’ ಎಂದು ಹೇಳಿದನು.’’

17 ಯೇಸು ತನ್ನ ಶಿಷ್ಯರಿಗೆ, ‘‘ಜನರನ್ನು ಪಾಪಕ್ಕೆ
ನಡೆಸುವಂಥ ಸಂಗತಿಗಳು ಖಂಡಿತವಾಗಿ ಬರುತ್ತವೆ.
ಆದರೆ ಅವುಗಳನ್ನು ಬರಮಾಡುವವನ ಗತಿಯನ್ನು ಏನು
ಹೇಳಲಿ! 2ಬಲಹೀನರಾದ ಇವರನ್ನು ಪಾಪಕ್ಕೆ ನಡೆಸುವವನು
ತನ್ನ ಕುತ್ತಿಗೆಗೆ ಒಂದು ದೊಡ್ಡ ಕಲ್ಲನ್ನು ಕಟ್ಟಿಕೊಂಡು ನೀರಿನಲ್ಲಿ
ಮುಳುಗುವುದೇ ಉತ್ತಮ. 3ಆದ್ದರಿಂದ ಎಚ್ಚರಿಕೆಯಾಗಿರಿ!
‘‘ನಿನ್ನ ಸಹೋದರನು ಪಾಪಮಾಡಿದರೆ, ಅವನನ್ನು
ಖಂಡಿಸು. ಒಂದುವೇಳೆ ಅವನೇನಾದರೂ ತನ್ನ ತಪ್ಪಿಗಾಗಿ
ಪಶ್ಚಾತ್ತಾಪಪಟ್ಟರೆ ಅವನನ್ನು ಕ್ಷಮಿಸು. 4ನಿನ್ನ ಸಹೋದರನು
ನಿನಗೆ ಒಂದು ದಿನದಲ್ಲಿ ಏಳು ಸಲ ತಪ್ಪುಮಾಡಿ, ಪ್ರತಿಸಲವೂ,
‘ನನ್ನನ್ನು ಕ್ಷಮಿಸು’ ಎಂದು ಕೇಳಿಕೊಂಡರೆ, ನೀನು ಅವನನ್ನು
ಕ್ಷಮಿಸಬೇಕು’’ ಎಂದು ಹೇಳಿದನು.

### ನಿಮ್ಮ ನಂಬಿಕೆ ಎಷ್ಟು ದೊಡ್ಡದು?

5ಅಪೊಸ್ತಲರು ಪ್ರಭುವಿಗೆ (ಯೇಸು), ‘‘ನಮ್ಮ
ನಂಬಿಕೆಯನ್ನು ಹೆಚ್ಚಿಸು!’’ ಎಂದು ಕೇಳಿಕೊಂಡರು.
6ಪ್ರಭುವು ಅವರಿಗೆ ಇಂತೆಂದನು: ‘‘ನಿಮ್ಮ ನಂಬಿಕೆ ಸಾಸಿವೆ
ಕಾಳಷ್ಟು ದೊಡ್ಡದಾಗಿದ್ದರೆ, ನೀವು ಈ ಅತ್ತಿಮರಕ್ಕೆ, ‘ಇಲ್ಲಿಂದ
ಕಿತ್ತುಕೊಂಡು ಹೋಗಿ ಸಾಗರದಲ್ಲಿ ಬೀಳು!’ ಎಂದು
ಹೇಳಿದರೂ ಅದು ನಿಮಗೆ ವಿಧೇಯವಾಗುತ್ತದೆ.

### ಒಳ್ಳೆಯ ಸೇವಕರಾಗಿರಿ

7‘‘ನಿಮ್ಮಲ್ಲಿ ಒಬ್ಬನಿಗೆ ಹೊಲದಲ್ಲಿ ಕೆಲಸಮಾಡುವಂಥ ಒಬ್ಬ
ಸೇವಕನಿದ್ದಾನೆಂದು ಭಾವಿಸಿಕೊಳ್ಳೋಣ. ಆ ಸೇವಕನು
ಭೂಮಿಯನ್ನು ಉಳುತ್ತಿರುತ್ತಾನೆ ಅಥವಾ ಕುರಿಗಳನ್ನು
ಮೇಯಿಸುತ್ತಿರುತ್ತಾನೆ. ಆ ಸೇವಕನು ಹೊಲದಲ್ಲಿ ಕೆಲಸ ಮುಗಿಸಿ
ಮನೆಗೆ ಬಂದಾಗ, ನೀನು ಅವನಿಗೆ ಏನು ಹೇಳುವೆ? ‘ಒಳಗೆ
ಬಾ! ಊಟಕ್ಕೆ ಕುಳಿತುಕೊ’ ಎಂದು ಹೇಳುವಿಯೊ? 8ಇಲ್ಲ!
ನೀನು ಅವನಿಗೆ, ‘ನನಗೋಸ್ಕರ ಅಡಿಗೆ ಮಾಡು. ಬಳಿಕ
ಶುಭ್ರವಾದ ಬಟ್ಟೆಯನ್ನು ಧರಿಸಿಕೊಂಡು ಬಂದು ನನಗೆ ಊಟ
ಬಡಿಸು. ನಾನು ತಿಂದು ಕುಡಿದಾದ ಮೇಲೆ ನೀನು ಊಟ
ಮಾಡು’ ಎಂದು ಹೇಳುವೆಯಷ್ಟೇ. 9ಆ ಸೇವಕನು ತನ್ನ ಕೆಲಸ
ಮಾಡಿದ್ದಕ್ಕಾಗಿ ನೀನೇನೂ ಅವನಿಗೆ ವಿಶೇಷ ಕೃತಜ್ಞತೆಗಳನ್ನು
ಸಲ್ಲಿಸಬೇಕಾಗಿಲ್ಲ. ಸೇವಕನಿರುವುದು ಯಜಮಾನನು ಹೇಳಿ
ದ್ದನ್ನು ಮಾಡುವುದಕ್ಕಾಗಿಯಷ್ಟೇ. 10ಇದೇ ನಿಯಮ ನಿಮಗೂ
ಅನ್ವಯಿಸುತ್ತದೆ. ನಿಮಗೆ ನೇಮಿಸಿದ ಕೆಲಸಗಳನ್ನು ನೀವು ಮಾಡಿ
ಪೂರೈಸಿದಾಗ, ‘ನಾವು ಆಳುಗಳು, ನಮ್ಮ ಕರ್ತವ್ಯವನ್ನು ನಾವು
ಮಾಡಿದ್ದೇವೆ’ ಎಂದು ಹೇಳಬೇಕು.’’

### ಕೃತಜ್ಞತೆಯುಳ್ಳವರಾಗಿರಿ

11ಯೇಸುವು ಜೆರುಸಲೇಮಿಗೆ ಪ್ರಯಾಣಮಾಡುತ್ತಾ
ಗಲಿಲೇಯದಿಂದ ಸಮಾರ್ಯಕ್ಕೆ ಹೋದನು. 12ಅಲ್ಲಿ ಆತನು
ಒಂದು ಗ್ರಾಮಕ್ಕೆ ಬಂದನು. ಅಲ್ಲಿ ಹತ್ತು ಜನರು ಆತನನ್ನು
ಭೇಟಿಯಾದರು. ಅವರು ಯೇಸುವಿನ ಸಮೀಪಕ್ಕೆ ಬರಲಿಲ್ಲ.
ಏಕೆಂದರೆ ಅವರೆಲ್ಲರೂ ಕುಷ್ಠರೋಗಿಗಳಾಗಿದ್ದರು. 13ಆದರೆ
ಅವರು, ''ಯೇಸುವೇ! ಗುರುವೇ! ದಯಮಾಡಿ ನಮಗೆ
ಸಹಾಯ ಮಾಡು!'' ಎಂದು ಕೂಗಿಕೊಂಡರು.

14ಯೇಸು ಅವರನ್ನು ನೋಡಿ, ''ಹೋಗಿ, ನಿಮ್ಮನ್ನು
ಯಾಜಕರಿಗೆ ತೋರಿಸಿಕೊಳ್ಳಿರಿ'' ಎಂದು ಹೇಳಿದನು.

ಅವರು ಯಾಜಕರ ಬಳಿಗೆ ಹೋಗುತ್ತಿದ್ದಾಗ ಅವರಿಗೆ
ವಾಸಿಯಾಯಿತು. 15ಅವರಲ್ಲಿ ಒಬ್ಬನು ತನಗೆ ಗುಣವಾದು
ದ್ದನ್ನು ಕಂಡು ಯೇಸುವಿನ ಬಳಿಗೆ ಹಿಂತಿರುಗಿ ಬಂದು ಗಟ್ಟಿ
ಯಾದ ಧ್ವನಿಯಿಂದ ದೇವರನ್ನು ಕೊಂಡಾಡಿದನು. 16ಅವನು
ಯೇಸುವಿನ ಪಾದಗಳಿಗೆ ಅಡ್ಡಬಿದ್ದು ಆತನಿಗೆ ವಂದನೆ
ಸಲ್ಲಿಸಿದನು. (ಅವನು ಸಮಾರ್ಯದವನು, ಯೆಹೂದ್ಯನಲ್ಲ.)
17ಯೇಸು, ''ಹತ್ತು ಜನರಿಗೆ ವಾಸಿಯಾಯಿತಲ್ಲಾ! ಇನ್ನುಳಿದ
ಒಂಭತ್ತು ಮಂದಿ ಎಲ್ಲಿ? 18ದೇವರಿಗೆ ಕೃತಜ್ಞತೆ ಸಲ್ಲಿಸಲು ಈ
ಸಮಾರ್ಯದವನನ್ನು ಬಿಟ್ಟು ಬೇರೆ ಯಾರೂ ಬರಲಿಲ್ಲವೇ?''
ಎಂದು ಕೇಳಿದನು. 19ಬಳಿಕ ಯೇಸು ಅವನಿಗೆ, ''ಎದ್ದೇಳು! ಈಗ
ನೀನು ಮನೆಗೆ ಹೋಗು! ನೀನು ನಂಬಿದ್ದರಿಂದಲೇ ನಿನಗೆ
ವಾಸಿಯಾಯಿತು'' ಅಂದನು.

### ದೇವರ ರಾಜ್ಯವು ನಿಮ್ಮೊಳಗಿದೆ

(ಮತ್ತಾಯ 24:23-28; 37-41)

20ಫರಿಸಾಯರಲ್ಲಿ ಕೆಲವರು ಯೇಸುವನ್ನು, ''ದೇವರ
ರಾಜ್ಯವು ಯಾವಾಗ ಬರುವುದು?'' ಎಂದು ಕೇಳಿದರು.

ಯೇಸು ಅವರಿಗೆ, ''ದೇವರ ರಾಜ್ಯವು ಬರುತ್ತಿದೆ, ಆದರೆ
ನಿಮ್ಮ ಕಣ್ಣುಗಳಿಗೆ ಕಾಣಿಸುವಂತೆ ಅದು ಬರುವುದಿಲ್ಲ.
21''ಇಗೋ, ದೇವರ ರಾಜ್ಯವು ಇಲ್ಲಿದೆ'! 'ಅಗೋ ಅಲ್ಲಿದೆ'!
ಎಂದು ಜನರು ಹೇಳುವಂತಿಲ್ಲ. ದೇವರ ರಾಜ್ಯವು ನಿಮ್ಮೊಳಗೇ
ಇದೆ'' ಎಂದು ಉತ್ತರಿಸಿದನು.

22ಬಳಿಕ ಯೇಸು ತನ್ನ ಶಿಷ್ಯರಿಗೆ, ''ಮನುಷ್ಯಕುಮಾರನ
ದಿನಗಳಲ್ಲೊಂದನ್ನು ನೀವು ನೋಡಬೇಕೆಂದು ಬಹಳವಾಗಿ
ಆಶಿಸುವ ಕಾಲವು ಬರುವುದು, ಆದರೆ ನೀವು ಅದನ್ನು ನೋಡ
ಲಾಗುವುದಿಲ್ಲ. 23ಜನರು ನಿಮಗೆ, 'ಅಗೋ, ಅಲ್ಲಿದ್ದಾನೆ,
ಇಗೋ, ಇಲ್ಲಿದ್ದಾನೆ!' ಎಂದು ಹೇಳುವರು. ನೀವು ಇದ್ದಲ್ಲಿಯೇ
ಇರಿ. ಅವರನ್ನು ಹಿಂಬಾಲಿಸಿ ಹೋಗಿ ಹುಡುಕಬೇಡಿ.

### ಯೇಸು ತಿರುಗಿ ಬರುವಾಗ ಲೋಕದ ಸ್ಥಿತಿ

24''ಮನುಷ್ಯಕುಮಾರನು ಬಂದಾಗ ನಿಮಗೇ ಗೊತ್ತಾಗು
ವುದು. ಆಕಾಶದ ಒಂದು ಕಡೆಯಿಂದ ಇನ್ನೊಂದು ಕಡೆಯವರೆಗೆ
ಹೊಳೆಯುವ ಮಿಂಚಿನಂತೆ ಆತನು ಬರುವನು. 25ಆದರೆ ಅದ
ಕ್ಕಿಂತಲೂ ಮೊದಲು, ಮನುಷ್ಯಕುಮಾರನು ಅನೇಕ ಸಂಕಟ
ಗಳನ್ನು ಅನುಭವಿಸಿ ಈ ಕಾಲದ ಜನರಿಂದ ಕೊಲ್ಲಲ್ಪಡುವನು.
26ಮನುಷ್ಯಕುಮಾರನು ತಿರುಗಿ ಬರುವ ದಿವಸಗಳಲ್ಲಿ ಈ
ಲೋಕದ ಸ್ಥಿತಿಯು ನೋಹನ ಕಾಲದ ಸ್ಥಿತಿಯಂತೆಯೇ
ಇರುವುದು. 27ನೋಹನ ಕಾಲದಲ್ಲಿ ಜನರು, ತಿನ್ನುತ್ತಾ, ಕುಡಿ
ಯುತ್ತಾ, ಮದುವೆ ಮಾಡಿಕೊಳ್ಳುತ್ತಾ ಮಾಡಿಕೊಡುತ್ತಾ
ಇದ್ದರು. ನೋಹನು ನಾವೆಯನ್ನು ಪ್ರವೇಶಿಸಿದ ದಿನದಲ್ಲಿಯೂ
ಅವರು ಹಾಗೆಯೇ ಮಾಡುತ್ತಿದ್ದರು. ಆಗ ಜಲಪ್ರಳಯ ಬಂದು
ಎಲ್ಲಾ ಜನರನ್ನು ನಾಶಮಾಡಿತು. 28ಲೋಟನ ಕಾಲದಲ್ಲಿ
ದೇವರು ಸೊದೋಮನ್ನು ನಾಶಮಾಡಿದಾಗ ಲೋಕದ
ಸ್ಥಿತಿಯು ಹೇಗಿತ್ತೋ ಅದೇರೀತಿಯಲ್ಲಿ ಮುಂದೆಯೂ ಇರು
ವುದು. ಆ ಜನರು ತಿನ್ನುತ್ತಾ, ಕುಡಿಯುತ್ತಾ, ಕೊಂಡು
ಕೊಳ್ಳುತ್ತಾ, ಮಾರಾಟ ಮಾಡುತ್ತಾ, ಬೀಜ ಬಿತ್ತುತ್ತಾ ಮತ್ತು ತಮ
ಗಾಗಿ ಮನೆಗಳನ್ನು ಕಟ್ಟಿಸಿಕೊಳ್ಳುತ್ತಾ ಇದ್ದರು. 29ಲೋಟನು ಆ
ಪಟ್ಟಣವನ್ನು ಬಿಟ್ಟುಹೊರಟ ದಿನದಲ್ಲಿಯೂ ಜನರು
ಹಾಗೆಯೇ ಮಾಡುತ್ತಿದ್ದರು. ಆಗ ಆಕಾಶದಿಂದ ಬೆಂಕಿಯ ಸುರಿ
ಮಳೆಯಾಗಿ ಅವರೆಲ್ಲರನ್ನೂ ನಾಶಮಾಡಿತು. 30ಮನುಷ್ಯ
ಕುಮಾರನು ತಿರುಗಿ ಬರುವಾಗ ಲೋಕದ ಸ್ಥಿತಿ ಅದೇ ರೀತಿ
ಯಲ್ಲಿರುವುದು.

31''ಆ ದಿನದಲ್ಲಿ, ಮಾಳಿಗೆಯ ಮೇಲಿರುವವನು ಮನೆ
ಯೊಳಗಿರುವ ತನ್ನ ವಸ್ತುಗಳನ್ನು ತೆಗೆದುಕೊಳ್ಳಲು
ಹೋಗದಿರಲಿ. ಹೊಲದಲ್ಲಿರುವವನು ತನ್ನ ಮನೆಗೆ ಮರಳಿ
ಹೋಗದಿರಲಿ. 32ಲೋಟನ ಹೆಂಡತಿಗೆ* ಸಂಭವಿಸಿದ್ದು
ಜ್ಞಾಪಕವಿದೆಯೇ? 33ತನ್ನ ಪ್ರಾಣವನ್ನು ಉಳಿಸಿಕೊಳ್ಳಲು
ಪ್ರಯತ್ನಿಸುವವನು ಅದನ್ನು ಕಳೆದುಕೊಳ್ಳುವನು. ಆದರೆ ತನ್ನ
ಪ್ರಾಣವನ್ನು ಕೊಡುವವನು ಅದನ್ನು ಉಳಿಸಿಕೊಳ್ಳುವನು.
34ನಾನು ತಿರುಗಿ ಬರುವಾಗ ಒಂದೇ ಕೋಣೆಯಲ್ಲಿ ಇಬ್ಬರು
ಮಲಗಿದ್ದರೂ ಅವರಲ್ಲಿ ಒಬ್ಬನನ್ನು ತೆಗೆದುಕೊಳ್ಳಲಾಗುವುದು,
ಮತ್ತೊಬ್ಬನನ್ನು ಬಿಡಲಾಗುವುದು. 35ಇಬ್ಬರು ಸ್ತ್ರೀಯರು
ಒಟ್ಟಿಗೆ ಕೆಲಸಮಾಡುತ್ತಿದ್ದರೂ ಅವರಲ್ಲಿ ಒಬ್ಬಳನ್ನು ತೆಗೆದು
ಕೊಳ್ಳಲಾಗುವುದು, ಇನ್ನೊಬ್ಬಳನ್ನು ಬಿಡಲಾಗುವುದು.'' 36*

37ಶಿಷ್ಯರು ಯೇಸುವಿಗೆ, ''ಪ್ರಭುವೇ, ಇದೆಲ್ಲಾ ಎಲ್ಲಿ
ಸಂಭವಿಸುವುದು?'' ಎಂದು ಕೇಳಿದರು.

ಯೇಸು ಅವರಿಗೆ, ''ಹದ್ದುಗಳು ಎಲ್ಲಿ ಕೂಡಿ ಬಂದಿರು
ತ್ತವೆಯೋ ಅಲ್ಲಿ ಹೆಣವಿದ್ದೇ ಇರುತ್ತದೆಯೆಂದು ಜನರು
ತಿಳಿದುಕೊಳ್ಳುತ್ತಾರೆ'' ಎಂದು ಉತ್ತರಿಸಿದನು.

### ತನ್ನ ಜನರಿಗೆ ದೇವರ ಉತ್ತರ

18 ನಿರಾಶರಾಗದೆ ಯಾವಾಗಲೂ ಪ್ರಾರ್ಥಿಸಬೇಕೆಂದು
ಯೇಸು ತನ್ನ ಶಿಷ್ಯರಿಗೆ ಈ ಸಾಮ್ಯದ ಮೂಲಕ
ಉಪದೇಶಿಸಿದನು: 2''ಒಂದು ಊರಿನಲ್ಲಿ ಒಬ್ಬ ನ್ಯಾಯಾಧೀಶ
ನಿದ್ದನು. ಅವನಿಗೆ ದೇವರಲ್ಲಿ ಭಯಭಕ್ತಿಯಿರಲಿಲ್ಲ. ಜನರು ತನ್ನ
ಬಗ್ಗೆ ಏನು ಯೋಚಿಸುತ್ತಾರೆ ಎಂಬುದರ ಬಗ್ಗೆ ಅವನು ಗಮನ

---

**ಲೋಟನ ಹೆಂಡತಿ** ಲೋಟನ ಹೆಂಡತಿಗೆ ಸಂಭವಿಸಿದ ಸಂಗತಿಯು ಆದಿಕಾಂಡ 19:15-17, 26ರಲ್ಲಿ ಇದೆ.

**ವಚನ 36** ಲೂಕನ ಸುವಾರ್ತೆಯ ಕೆಲವು ಗ್ರೀಕ್ ಪ್ರತಿಗಳಲ್ಲಿ 36ನೇ ವಚನ ಸೇರಿಸಲ್ಪಟ್ಟಿದೆ. ''ಇಬ್ಬರು ಗಂಡಸರು ಒಂದೇ ಹೊಲದಲ್ಲಿರುವರು. ಒಬ್ಬನು ತೆಗೆದುಕೊಳ್ಳಲ್ಪಡುವನು, ಆದರೆ ಇನ್ನೊಬ್ಬನು ಬಿಡಲ್ಪಡುವನು.''

ಕೊಡಲಿಲ್ಲ. 3ಅದೇ ಊರಿನಲ್ಲಿ ಒಬ್ಬ ವಿಧವೆಯಿದ್ದಳು. ಆಕೆಯು
ಅನೇಕ ಸಲ ನ್ಯಾಯಾಧೀಶನ ಬಳಿಗೆ ಬಂದು, 'ಇಲ್ಲಿ
ನನಗೊಬ್ಬನು ತೊಂದರೆ ಕೊಡುತ್ತಿದ್ದಾನೆ. ದಯವಿಟ್ಟು ನನಗೆ
ನ್ಯಾಯವನ್ನು ದೊರಕಿಸಿಕೊಡಿ!' ಎಂದು ಬೇಡಿಕೊಂಡಳು.
4ಆದರೆ ನ್ಯಾಯಾಧೀಶನು ಆ ಸ್ತ್ರೀಗೆ ಸಹಾಯಮಾಡಲು
ಬಯಸಲಿಲ್ಲ. ಬಹಳ ಸಮಯದ ನಂತರ ಆ ನ್ಯಾಯಾಧೀಶನು
ತನ್ನೊಳಗೆ, 'ನನಗಂತೂ ದೇವರಲ್ಲಿ ಭಯಭಕ್ತಿಯಿಲ್ಲ. ಜನರು
ನನ್ನ ಬಗ್ಗೆ ಏನು ಯೋಚಿಸುತ್ತಾರೆಂಬುದರ ಬಗ್ಗೆಯೂ
ಗಮನವಿಲ್ಲ. 5ಆದರೆ ಈ ಸ್ತ್ರೀ ಬಂದುಬಂದು ನನ್ನನ್ನು ಕುಗ್ಗಿಸಿ
ಬಿಡುತ್ತಾಳೆ. ಈಕೆಗೆ ನಾನು ನ್ಯಾಯವನ್ನು ದೊರಕಿಸಿಕೊಟ್ಟರೆ,
ಈಕೆ ನನ್ನನ್ನು ಕಾಡಿಸುವುದಿಲ್ಲ. ಇಲ್ಲವಾದರೆ, ಈಕೆಯು ನನ್ನನ್ನು
ಕಾಡಿಸುತ್ತಲೇ ಇರುವಳು' ಎಂದುಕೊಂಡನು.''

6ಪ್ರಭುವು ಈ ಸಾಮ್ಯವನ್ನು ಹೇಳಿದ ಮೇಲೆ ತನ್ನ ಶಿಷ್ಯರಿಗೆ,
''ಕೇಳಿರಿ! ಅನ್ಯಾಯಗಾರನಾದ ನ್ಯಾಯಾಧೀಶನು ಹೇಳಿದ್ದರಲ್ಲಿ
ಅರ್ಥವಿದೆ. 7ದೇವಜನರು ದೇವರಿಗೆ ಹಗಲಿರುಳು ಮೊರೆಯಿಡ
ಬೇಕು. ದೇವರು ತನ್ನ ಜನರಿಗೆ ಸರಿಯಾದದ್ದನ್ನೇ ಯಾವಾಗಲೂ
ಕೊಡುತ್ತಾನೆ. ತನ್ನ ಜನರಿಗೆ ಉತ್ತರ ಕೊಡುವುದರಲ್ಲಿ ದೇವರು
ತಡಮಾಡುವುದಿಲ್ಲ! 8ದೇವರು ತನ್ನ ಜನರಿಗೆ ಬೇಗನೆ ಸಹಾಯ
ಮಾಡುತ್ತಾನೆ ಎಂದು ನಾನು ನಿಮಗೆ ಹೇಳುತ್ತೇನೆ. ಆದರೆ
ಮನುಷ್ಯಕುಮಾರನು ಮತ್ತೆ ಬಂದಾಗ, ಜಗತ್ತಿನಲ್ಲಿ ನಂಬಿಕೆ
ಯನ್ನು ಕಾಣುವನೋ?'' ಎಂದನು.

### ನೀತಿನಿರ್ಣಯ

9ಅಲ್ಲಿ ಕೆಲವರು ತಾವೇ ಬಹಳ ಒಳ್ಳೆಯವರೆಂದು
ಭಾವಿಸಿಕೊಂಡಿದ್ದರು. ಈ ಜನರು ತಾವು ಬೇರೆಯವರಿಗಿಂತ
ಉತ್ತಮರೋ ಎಂಬಂತೆ ವರ್ತಿಸುತ್ತಿದ್ದರು. ಯೇಸು ಅವರಿಗೆ ಈ
ಸಾಮ್ಯದ ಮೂಲಕ ಉಪದೇಶಿಸಿದನು. 10''ಒಮ್ಮೆ ಒಬ್ಬ
ಫರಿಸಾಯನು ಮತ್ತು ಒಬ್ಬ ಸುಂಕ ವಸೂಲಿಗಾರನು
ಪ್ರಾರ್ಥಿಸಲು ದೇವಾಲಯಕ್ಕೆ ಹೋದರು. 11ಫರಿಸಾಯನು
ಸುಂಕ ವಸೂಲಿಗಾರನನ್ನು ಕಂಡು ದೂರದಲ್ಲಿ ನಿಂತುಕೊಂಡು
ಹೀಗೆ ಪ್ರಾರ್ಥಿಸಿದನು: 'ದೇವರೇ, ನಾನು ಬೇರೆಯವರಂತೆ
ಸುಲಿಗೆಗಾರನಲ್ಲ, ಮೋಸಗಾರನಲ್ಲ, ಅಥವಾ ವ್ಯಭಿಚಾರಿ
ಯಲ್ಲ. ನಾನು ಈ ಸುಂಕ ವಸೂಲಿಗಾರನಂತೆಯೂ ಅಲ್ಲ.
ಇದಕ್ಕಾಗಿ ನಾನು ನಿನಗೆ ಸ್ತೋತ್ರ ಸಲ್ಲಿಸುತ್ತೇನೆ. 12ನಾನಾದರೊ
ವಾರದಲ್ಲಿ ಎರಡಾವರ್ತಿ ಉಪವಾಸ ಮಾಡುತ್ತೇನೆ.
ಸಂಪಾದಿಸುವ ಪ್ರತಿಯೊಂದರಲ್ಲಿಯೂ ಹತ್ತನೆಯ ಒಂದು
ಭಾಗವನ್ನು ನಿನಗೆ ಕೊಡುತ್ತೇನೆ!' ಅಂದನು.

13''ಸುಂಕ ವಸೂಲಿಗಾರನು ಅಲ್ಲಿ ಒಬ್ಬಂಟಿಗನಾಗಿಯೇ
ನಿಂತುಕೊಂಡಿದ್ದನು. ಅವನು ಆಕಾಶದ ಕಡೆಗೆ ಕಣ್ಣೆತ್ತಿ
ನೋಡದೇ, ದೇವರ ಮುಂದೆ ತನ್ನನ್ನು ಬಹಳವಾಗಿ ತಗ್ಗಿಸಿ
ಕೊಂಡು, 'ದೇವರೇ, ನನಗೆ ಕರುಣೆ ತೋರು; ನಾನು
ಪಾಪಿಯಾಗಿದ್ದೇನೆ' ಎಂದು ಪ್ರಾರ್ಥಿಸಿದನು. 14ಅವನು ನೀತಿ
ವಂತನೆಂದು ನಿರ್ಣಯಿಸಲ್ಪಟ್ಟವನಾಗಿ ಮನೆಗೆ ಹೋದನು.
ಆದರೆ ಆ ಫರಿಸಾಯನು ನೀತಿವಂತನೆಂದು ನಿರ್ಣಯಿಸ
ಲ್ಪಡಲಿಲ್ಲ. ತನ್ನನ್ನು ಹೆಚ್ಚಿಸಿಕೊಳ್ಳುವ ಪ್ರತಿಯೊಬ್ಬನೂ
ತಗ್ಗಿಸಲ್ಪಡುವನು; ತನ್ನನ್ನು ತಗ್ಗಿಸಿಕೊಳ್ಳುವ ಪ್ರತಿಯೊಬ್ಬನೂ
ಹೆಚ್ಚಿಸಲ್ಪಡುವನು.''

### ದೇವರ ರಾಜ್ಯಕ್ಕೆ ಯಾರು ಪ್ರವೇಶಿಸುವರು?

(ಮತ್ತಾಯ 19:13-15; ಮಾರ್ಕ 10:13-16)

15ಕೆಲವು ಜನರು ತಮ್ಮ ಚಿಕ್ಕಮಕ್ಕಳನ್ನು ಯೇಸುವಿನಿಂದ
ಮುಟ್ಟಿಸಬೇಕೆಂದು ಆತನ ಬಳಿಗೆ ತಂದರು. ಆದರೆ ಶಿಷ್ಯರು
ಇದನ್ನು ನೋಡಿ, 'ಮಕ್ಕಳನ್ನು ತರಕೂಡದು' ಎಂದು ಜನರಿಗೆ
ಹೇಳಿದರು. 16ಆದರೆ ಯೇಸುವು ಚಿಕ್ಕಮಕ್ಕಳನ್ನು ತನ್ನ ಬಳಿಗೆ
ಕರೆದು ತನ್ನ ಶಿಷ್ಯರಿಗೆ, ''ಚಿಕ್ಕಮಕ್ಕಳನ್ನು ನನ್ನ ಬಳಿಗೆ
ಬರಗೊಡಿಸಿರಿ. ಅವರಿಗೆ ಅಡ್ಡಿಮಾಡಬೇಡಿರಿ. ಏಕೆಂದರೆ ದೇವರ
ರಾಜ್ಯವು ಈ ಚಿಕ್ಕಮಕ್ಕಳಂತಿರುವ ಜನರದೇ. 17ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ಶಿಶುಭಾವದಿಂದ ನೀವು ದೇವರ
ರಾಜ್ಯವನ್ನು ಅಂಗೀಕರಿಸಬೇಕು. ಇಲ್ಲವಾದರೆ, ನೀವು ಎಂದಿಗೂ
ಅದರೊಳಗೆ ಪ್ರವೇಶಿಸುವುದಿಲ್ಲ!'' ಎಂದು ಹೇಳಿದನು.

### ಐಶ್ವರ್ಯವಂತನೊಬ್ಬನು ಯೇಸುವಿಗೆ ಕೇಳಿದ ಪ್ರಶ್ನೆ

(ಮತ್ತಾಯ 19:16-30; ಮಾರ್ಕ 10:17-31)

18ಒಬ್ಬ ಯೆಹೂದ್ಯನಾಯಕನು ಯೇಸುವಿಗೆ, ''ಒಳ್ಳೆಯ
ಉಪದೇಶಕನೇ, ನಿತ್ಯಜೀವ ಹೊಂದಲು ನಾನೇನು ಮಾಡ
ಬೇಕು?'' ಎಂದು ಕೇಳಿದನು.

19ಯೇಸು ಅವನಿಗೆ, ''ನನ್ನನ್ನು ಒಳ್ಳೆಯವನೆಂದು ನೀನು
ಏಕೆ ಕರೆಯುತ್ತೀ? ದೇವರೊಬ್ಬನೇ ಒಳ್ಳೆಯವನು. 20ದೇವರ
ಈ ಆಜ್ಞೆಗಳು ನಿನಗೆ ಗೊತ್ತೇ ಇವೆ: 'ನೀನು ವ್ಯಭಿಚಾರ ಮಾಡ
ಬಾರದು, ಯಾರನ್ನೂ ಕೊಲೆಮಾಡಬಾರದು, ಯಾವುದನ್ನೂ
ಕದಿಯಬಾರದು, ಬೇರೆ ಜನರ ಬಗ್ಗೆ ನೀನು ಸುಳ್ಳನ್ನು ಹೇಳ
ಬಾರದು ಮತ್ತು ನೀನು ನಿನ್ನ ತಂದೆತಾಯಿಗಳನ್ನು ಗೌರವಿಸ
ಬೇಕು' * ಎಂದನು. 21ಅದಕ್ಕೆ ಅವನು, ''ನಾನು ಚಿಕ್ಕಂದಿ
ನಿಂದಲೂ ಆ ಆಜ್ಞೆಗಳಿಗೆಲ್ಲಾ ವಿಧೇಯನಾಗಿದ್ದೇನೆ!'' ಎಂದು
ಹೇಳಿದನು. 22ಆಗ ಯೇಸು ಅವನಿಗೆ, ''ನೀನು ಮಾಡಬೇಕಾದ
ಇನ್ನೊಂದು ಕಾರ್ಯವಿದೆ. ನಿನ್ನ ಆಸ್ತಿಯನ್ನೆಲ್ಲಾ ಮಾರಿ ಅದ
ರಿಂದ ಬಂದ ಹಣವನ್ನು ಬಡ ಜನರಿಗೆ ಕೊಡು. ನಿನಗೆ
ಪರಲೋಕದಲ್ಲಿ ಪ್ರತಿಫಲ ದೊರೆಯುವುದು. ನೀನಾದರೋ
ಬಂದು ನನ್ನನ್ನು ಹಿಂಬಾಲಿಸು!'' ಅಂದನು. 23ಯೇಸುವಿನ ಈ
ಮಾತುಗಳನ್ನು ಕೇಳಿದಾಗ ಅವನಿಗೆ ಬಹಳ ದುಃಖವಾಯಿತು.
ಏಕೆಂದರೆ ಅವನು ಬಹಳ ಐಶ್ವರ್ಯವಂತನಾಗಿದ್ದನು.

24ಆಗ ಯೇಸು ಅವನನ್ನು ನೋಡಿ, ''ಐಶ್ವರ್ಯವಂತರು
ದೇವರ ರಾಜ್ಯಕ್ಕೆ ಸೇರುವುದು ಬಹಳ ಕಷ್ಟ! 25ಐಶ್ವರ್ಯವಂತನು
ದೇವರ ರಾಜ್ಯಕ್ಕೆ ಪ್ರವೇಶಿಸುವುದಕ್ಕಿಂತಲೂ ಒಂಟೆಯು
ಸೂಜಿಯ ಕಣ್ಣಿನ ಮೂಲಕ ನುಸುಳಿ ಹೋಗುವುದು ಸುಲಭ!''
ಎಂದನು.

### ಯಾರಿಗೆ ರಕ್ಷಣೆಯಾಗುವುದು?

26ಜನರು ಯೇಸುವಿನ ಈ ಮಾತನ್ನು ಕೇಳಿ, ''ಹಾಗಾದರೆ
ಯಾರಿಗೆ ರಕ್ಷಣೆಯಾಗುವುದು?'' ಎಂದು ಕೇಳಿದರು.

27ಯೇಸು ಅವರಿಗೆ, ''ಜನರಿಗೆ ಅಸಾಧ್ಯವಾದ ಕಾರ್ಯ
ಗಳನ್ನು ದೇವರು ಮಾಡಬಲ್ಲನು'' ಎಂದು ಉತ್ತರಿಸಿದನು.

---

**ನೀನು … ಗೌರವಿಸಬೇಕು** ವಿಮೋಚನ. 20:12-16; ಧರ್ಮೋಪದೇಶ. 5:16-20

28ಪೇತ್ರನು, ‘‘ನೋಡು, ನಾವು ನಮ್ಮದೆಲ್ಲವನ್ನೂ ಬಿಟ್ಟು ನಿನ್ನನ್ನು ಹಿಂಬಾಲಿಸಿದೆವು!’’ ಅಂದನು.

29ಅದಕ್ಕೆ ಯೇಸು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ದೇವರ ರಾಜ್ಯದ ನಿಮಿತ್ತ ತನ್ನ ಮನೆ, ಹೆಂಡತಿ, ಸಹೋದರರು, ತಂದೆತಾಯಿಗಳು ಅಥವಾ ಮಕ್ಕಳನ್ನು ತ್ಯಜಿಸಿದ ಪ್ರತಿಯೊಬ್ಬನು ತಾನು ತ್ಯಜಿಸಿದ್ದಕ್ಕಿಂತಲೂ ಹೆಚ್ಚು ಪಡೆಯುವನು. 30ಅವನು ಈ ಜೀವನದಲ್ಲಿಯೇ ಅವುಗಳಿಗಿಂತ ಅನೇಕ ಪಾಲು ಹೆಚ್ಚಾದವುಗಳನ್ನು ಪಡೆಯುವನು ಮತ್ತು ತನ್ನ ಮುಂದಿನ ಲೋಕದಲ್ಲಿ ದೇವರೊಂದಿಗೆ ಸದಾಕಾಲ ಜೀವಿಸುವನು’’ ಎಂದು ಹೇಳಿದನು.

### ತನ್ನ ಮರಣದ ಬಗ್ಗೆ ಯೇಸುವಿನ ಪ್ರಕಟನೆ

(ಮತ್ತಾಯ 20:17-19; ಮಾರ್ಕ 10:32-34)

31ಬಳಿಕ ಯೇಸು ತನ್ನ ಹನ್ನೆರಡು ಮಂದಿ ಅಪೊಸ್ತಲರೊಂದಿಗೆ ಪ್ರತ್ಯೇಕವಾಗಿ ಮಾತಾಡಿದನು. ಅವರಿಗೆ, ‘‘ಕೇಳಿರಿ! ನಾವು ಜೆರುಸಲೇಮಿಗೆ ಹೋಗುತ್ತಿದ್ದೇವೆ. ದೇವರು ತನ್ನ ಪ್ರವಾದಿಗಳ ಕೈಯಿಂದ ಮನುಷ್ಯಕುಮಾರನ ಬಗ್ಗೆ ಬರೆಸಿರುವ ಪ್ರತಿಯೊಂದು ಸಂಗತಿಯೂ ಸಂಭವಿಸುವುದು! 32ಆತನ ಜನರೇ ಆತನಿಗೆ ವಿರೋಧವಾಗಿ ಎದ್ದು ಯೆಹೂದ್ಯರಲ್ಲದ ಜನರಿಗೆ ಆತನನ್ನು ಒಪ್ಪಿಸಿಕೊಡುವರು. ಅವರು ಆತನನ್ನು ಗೇಲಿಮಾಡಿ ಆತನ ಮುಖಕ್ಕೆ ಉಗುಳುವರು. ಆತನಿಗೆ ಅವಮಾನ ಮಾಡುವರು ಮತ್ತು ನಾಚಿಕೆಪಡಿಸುವರು. 33ಅವರು ಆತನಿಗೆ ಕೊರಡೆಗಳಿಂದ ಹೊಡೆಯುವರು, ಮತ್ತು ಆತನನ್ನು ಕೊಲ್ಲುವರು! ಆದರೆ ಆತನು ತನ್ನ ಮೂರನೇ ದಿನದಲ್ಲಿ ಮತ್ತೆ ಜೀವಂತವಾಗಿ ಎದ್ದು ಬರುವನು’’ ಅಂದನು. 34ಅಪೊಸ್ತಲರು ಇದನ್ನು ಗ್ರಹಿಸಿಕೊಳ್ಳಲು ಪ್ರಯತ್ನಿಸಿದರೂ ಅವರಿಗೆ ಸಾಧ್ಯವಾಗಲಿಲ್ಲ, ಏಕೆಂದರೆ ಅದರ ಅರ್ಥವು ಅವರಿಗೆ ಮರೆಯಾಗಿತ್ತು.

### ಯೇಸುವಿನಿಂದ ಕಣ್ಣುಪಡೆದ ಕುರುಡ

(ಮತ್ತಾಯ 20:29-34; ಮಾರ್ಕ 10:46-52)

35ಯೇಸು ಜೆರಿಕೊ ಪಟ್ಟಣವನ್ನು ಸಮೀಪಿಸುತ್ತಿದ್ದಾಗ, ಆ ರಸ್ತೆಯ ಪಕ್ಕದಲ್ಲಿ ಒಬ್ಬ ಕುರುಡನು ಕುಳಿತುಕೊಂಡು ಭಿಕ್ಷೆ ಬೇಡುತ್ತಿದ್ದನು. 36ಆ ರಸ್ತೆಯಲ್ಲಿ ಜನಸಮೂಹದ ಶಬ್ದವನ್ನು ಕೇಳಿ ಆ ಕುರುಡನು, ‘‘ಯಾವ ಸಮಾರಂಭ ನಡೆಯುತ್ತಿದೆ’’ ಎಂದು ಕೇಳಿದನು.

37ಜನರು ಅವನಿಗೆ, ‘‘ನಜರೇತಿನ ಯೇಸು ಬರುತ್ತಿದ್ದಾನೆ.’’ ಎಂದು ತಿಳಿಸಿದರು.

38ಆ ಕುರುಡನು ಗಟ್ಟಿಯಾಗಿ, ‘‘ಯೇಸುವೇ, ದಾವೀದನ ಕುಮಾರನೇ ದಯಮಾಡಿ ನನಗೆ ಸಹಾಯಮಾಡು!’’ ಎಂದು ಕೂಗಿದನು.

39ಜನಸಮೂಹದ ಮುಂದಿದ್ದ ಜನರು ಕುರುಡನನ್ನು ಗದರಿಸಿ, ಅವನಿಗೆ ಮಾತಾಡಕೂಡದೆಂದು ಹೇಳಿದರು. ಆದರೆ ಆ ಕುರುಡನು ಮತ್ತಷ್ಟು ಗಟ್ಟಿಯಾಗಿ, ‘‘ದಾವೀದನ ಕುಮಾರನೇ, ದಯಮಾಡಿ ನನಗೆ ಸಹಾಯಮಾಡು!’’ ಎಂದು ಕೂಗಿದನು.

40ಯೇಸು ಅಲ್ಲೇ ನಿಂತು, ‘‘ಆ ಕುರುಡನನ್ನು ನನ್ನ ಬಳಿಗೆ ಕರೆದುಕೊಂಡು ಬನ್ನಿರಿ’’ ಎಂದು ಹೇಳಿದನು. ಆ ಕುರುಡನು ಹತ್ತಿರಕ್ಕೆ ಬಂದಾಗ, ಯೇಸು ಅವನಿಗೆ, 41‘‘ನಾನು ನಿನಗಾಗಿ ಏನು ಮಾಡಬೇಕು’’ ಎಂದು ಕೇಳಿದನು.

ಕುರುಡನು, ‘‘ಪ್ರಭುವೇ, ನನಗೆ ಮತ್ತೆ ಕಣ್ಣು ಕಾಣುವಂತೆ ಮಾಡು’’ ಅಂದನು.

42ಯೇಸು ಅವನಿಗೆ, ‘‘ನೀನು ನಂಬಿದ್ದರಿಂದಲೇ, ನಿನಗೆ ವಾಸಿಯಾಯಿತು’’ ಎಂದು ಹೇಳಿದನು.

43ಆಗ ಆ ಕುರುಡನಿಗೆ ದೃಷ್ಟಿ ಬಂದಿತು. ಅವನು ದೇವರನ್ನು ಸ್ತುತಿಸುತ್ತಾ ಯೇಸುವನ್ನು ಹಿಂಬಾಲಿಸಿದನು. ಇದನ್ನು ನೋಡಿದ ಜನರೆಲ್ಲರೂ, ಈ ಮಹತ್ಕಾರ್ಯಕ್ಕಾಗಿ ದೇವರನ್ನು ಕೊಂಡಾಡಿದರು.

### ಜಕ್ಕಾಯ

19 ಒಮ್ಮೆ ಯೇಸು ಜೆರಿಕೊ ಪಟ್ಟಣದ ಮೂಲಕ ಹೋಗುತ್ತಿದ್ದನು. 2ಆ ಪಟ್ಟಣದಲ್ಲಿ ಜಕ್ಕಾಯನೆಂಬ ಮನುಷ್ಯನಿದ್ದನು. ಅವನು ಐಶ್ವರ್ಯವಂತನೂ ಪ್ರಧಾನ ಸುಂಕ ವಸೂಲಿಗಾರನೂ ಆಗಿದ್ದನು. 3ಅವನು ಯೇಸುವನ್ನು ನೋಡಲು ಬಯಸಿದನು. ಯೇಸುವನ್ನು ನೋಡುವುದಕ್ಕಾಗಿ ಇತರ ಅನೇಕ ಜನರೂ ಅಲ್ಲಿದ್ದರು. ಜಕ್ಕಾಯನು ಬಹಳ ಗಿಡ್ಡನಾಗಿದ್ದುದರಿಂದ ಆ ಜನರ ಗುಂಪಿನ ದೆಸೆಯಿಂದ ಯೇಸುವನ್ನು ನೋಡಲಾಗಲಿಲ್ಲ. 4ಆದ್ದರಿಂದ ಅವನು ಬೇರೊಂದು ಸ್ಥಳಕ್ಕೆ ಓಡಿಹೋಗಿ ಒಂದು ಆಲದ ಮರವನ್ನು ಹತ್ತಿ ಕುಳಿತುಕೊಂಡನು. ಯೇಸು ಆ ಸ್ಥಳದ ಮೂಲಕ ಹೋಗುವನೆಂದು ಜಕ್ಕಾಯನಿಗೆ ಗೊತ್ತಿತ್ತು. 5ಯೇಸು ಆ ಸ್ಥಳಕ್ಕೆ ಬಂದಾಗ, ಮರದ ಮೇಲೆ ಕುಳಿತಿದ್ದ ಜಕ್ಕಾಯನನ್ನು ಕಣ್ಣೆತ್ತಿ ನೋಡಿ ಅವನಿಗೆ, ‘‘ಜಕ್ಕಾಯನೇ, ಬೇಗನೆ ಕೆಳಗಿಳಿದು ಬಾ! ಈ ದಿನ ನಾನು ನಿನ್ನ ಮನೆಯಲ್ಲಿ ಇಳಿದುಕೊಳ್ಳಬೇಕು’’ ಎಂದು ಹೇಳಿದನು.

6ಆಗ ಜಕ್ಕಾಯನು ಬೇಗನೆ ಕೆಳಗಿಳಿದು ಬಂದು ಯೇಸುವನ್ನು ಸಂತೋಷದಿಂದ ಸ್ವಾಗತಿಸಿದನು. 7ಜನರೆಲ್ಲರೂ ಇದನ್ನು ನೋಡಿ, ‘‘ಯೇಸು ಎಂಥವನ ಮನೆಯಲ್ಲಿ ಇಳಿದುಕೊಳ್ಳುತ್ತಾನೆ, ಜಕ್ಕಾಯನು ಪಾಪಿ’’ ಎಂದು ಆಕ್ಷೇಪಣೆ ಮಾಡತೊಡಗಿದರು.

8ಜಕ್ಕಾಯನು ಪ್ರಭುವಿಗೆ (ಯೇಸುವಿಗೆ), ‘‘ನಾನು ಜನರಿಗೆ ಉಪಕಾರ ಮಾಡಬೇಕೆಂದಿದ್ದೇನೆ. ನಾನು ನನ್ನ ಹಣದಲ್ಲಿ ಅರ್ಧವನ್ನು ಬಡವರಿಗೆ ಕೊಡುವೆನು. ನಾನು ಯಾರಿಗಾದರೂ ಮೋಸ ಮಾಡಿದ್ದರೆ, ಆ ವ್ಯಕ್ತಿಗೆ ಅದರ ನಾಲ್ಕರಷ್ಟು ಹೆಚ್ಚಾಗಿ ಕೊಡುತ್ತೇನೆ’’ ಎಂದು ಹೇಳಿದನು.

9ಯೇಸು, ‘‘ಈ ಮನುಷ್ಯನು ಒಳ್ಳೆಯವನೇ ಸರಿ. ಇವನು ನಿಜವಾಗಿಯೂ ಅಬ್ರಹಾಮನ ಕುಟುಂಬಕ್ಕೆ ಸೇರಿದ್ದಾನೆ. ಇಂದೇ ಈ ಮನೆಗೆ ರಕ್ಷಣೆ ಆಯಿತು. 10ಮನುಷ್ಯಕುಮಾರನು ಬಂದದ್ದು ತಪ್ಪಿಹೋದ ಜನರನ್ನು ಹುಡುಕಿ ರಕ್ಷಿಸುವುದಕ್ಕಾಗಿಯಷ್ಟೇ’’ ಎಂದು ಹೇಳಿದನು.

### ದೇವರು ಕೊಡುವ ವರಗಳನ್ನು ಉಪಯೋಗಿಸಿರಿ

(ಮತ್ತಾಯ 25:14-30)

11ಯೇಸು ಪ್ರಯಾಣ ಮಾಡುತ್ತಾ ಜೆರುಸಲೇಮಿನ ಸಮೀಪಕ್ಕೆ ಬಂದನು. ಕೆಲವು ಜನರು ದೇವರ ರಾಜ್ಯವು ಬೇಗನೆ ಬರಲಿದೆ ಎಂದುಕೊಂಡರು. 12ಜನರ ಈ ಭಾವನೆಯು ಯೇಸು

ವಿಗೆ ತಿಳಿದಿತ್ತು. ಆದ್ದರಿಂದ ಆತನು ಈ ಸಾಮ್ಯವನ್ನು ಹೇಳಿದನು:
‘‘ಬಹಳ ಪ್ರಾಮುಖ್ಯನಾದ ಒಬ್ಬನು ರಾಜ್ಯಾಧಿಕಾರವನ್ನು
ಪಡೆದುಕೊಂಡು ಬರುವುದಕ್ಕಾಗಿ ದೂರದೇಶಕ್ಕೆ*
ಹೊರಟನು. ರಾಜ್ಯಾಧಿಕಾರವನ್ನು ಪಡೆದುಕೊಂಡ ಮೇಲೆ
ಹಿಂತಿರುಗಿ ಬಂದು ತನ್ನ ಜನರನ್ನು ಆಳಬೇಕೆಂಬುದು ಅವನ
ಬಯಕೆಯಾಗಿತ್ತು. 13ಆದ್ದರಿಂದ ಅವನು ತನ್ನ ಸೇವಕರಲ್ಲಿ ಹತ್ತು
ಮಂದಿಯನ್ನು ಒಟ್ಟಾಗಿ ಕರೆದು ಅವರಲ್ಲಿ ಪ್ರತಿಯೊಬ್ಬರಿಗೂ
ಒಂದೊಂದು ಸಾವಿರ ರೂಪಾಯಿ ಕೊಟ್ಟು, ‘ನಾನು ಹಿಂತಿರುಗಿ
ಬರುವವರೆಗೆ ಈ ಹಣದಿಂದ ವ್ಯಾಪಾರ ಮಾಡಿರಿ’ ಎಂದು ಹೇಳಿ
ದನು. 14ಆದರೆ ಅವನ ದೇಶದ ಜನರು ಅವನನ್ನು ದ್ವೇಷಿಸಿ,
ಜನರ ಒಂದು ಗುಂಪನ್ನು ಅವನ ಹಿಂದೆ ಕಳುಹಿಸಿದರು. ಆ
ಗುಂಪಿನ ಜನರು ದೂರದೇಶದಲ್ಲಿ, ‘ಇವನು ನಮ್ಮ ರಾಜ
ನಾಗುವುದು ನಮಗೆ ಇಷ್ಟವಿಲ್ಲ!’ ಎಂದು ಹೇಳಿದರು.

15‘‘ಆದರೂ ಅವನು ಅರಸನಾದನು. ಅವನು ತನ್ನ ದೇಶಕ್ಕೆ
ಹಿಂತಿರುಗಿದಾಗ, ‘ನನ್ನ ಹಣ ಹೊಂದಿರುವ ಸೇವಕರನ್ನು
ಕರೆಯಿರಿ. ಅವರು ಅದರಿಂದ ಎಷ್ಟು ಹೆಚ್ಚು ಹಣ ಸಂಪಾದಿಸಿ
ದ್ದಾರೆಂದು ನಾನು ನೋಡಬೇಕು’ ಎಂದು ಹೇಳಿದನು.
16ಮೊದಲನೆಯ ಸೇವಕನು ಬಂದು, ‘ಸ್ವಾಮೀ, ನಿನ್ನ ಒಂದು
ಸಾವಿರ ರೂಪಾಯಿಯಿಂದ ಹತ್ತು ಸಾವಿರ ರೂಪಾಯಿ
ಸಂಪಾದಿಸಿದ್ದೇನೆ!’ ಎಂದು ಹೇಳಿದನು.

17ಅರಸನು ಆ ಸೇವಕನಿಗೆ, ‘ಭಲೇ! ನೀನು ಒಳ್ಳೆಯ ಆಳು.
ಚಿಕ್ಕ ವಿಷಯಗಳಲ್ಲಿಯೂ ನಾನು ನಿನ್ನ ಮೇಲೆ ಭರವಸೆ
ಇಡಬಹುದೆಂದು ನನಗೆ ತಿಳಿಯಿತು. ಆದ್ದರಿಂದ ನನ್ನ ಹತ್ತು
ಪಟ್ಟಣಗಳನ್ನು ಆಳುವುದಕ್ಕೆ ನಿನ್ನನ್ನು ನೇಮಿಸುವೆನು!’ ಎಂದು
ಹೇಳಿದನು. 18ಎರಡನೆಯ ಸೇವಕನು ಬಂದು ‘ಸ್ವಾಮೀ, ನಿನ್ನ
ಒಂದು ಸಾವಿರ ರೂಪಾಯಿಯಿಂದ ಐದು ಸಾವಿರ ರೂಪಾಯಿ
ಸಂಪಾದಿಸಿದ್ದೇನೆ’ ಅಂದನು. 19ಅರಸನು ಆ ಸೇವಕನಿಗೆ, ‘ನೀನು
ನನ್ನ ಐದು ಪಟ್ಟಣಗಳಿಗೆ ಅಧಿಕಾರಿಯಾಗಿರು’ ಎಂದು
ಹೇಳಿದನು. 20ಆ ಬಳಿಕ ಇನ್ನೊಬ್ಬ ಆಳು ಬಂದು ಅರಸನಿಗೆ,
‘ಸ್ವಾಮೀ, ನಿನ್ನ ಒಂದು ಸಾವಿರ ರೂಪಾಯಿ ಇಲ್ಲಿದೆ. 21ನೀನು
ಬಲಿಷ್ಠನೂ ಕಠಿಣ ಮನುಷ್ಯನೂ ಸ್ವತಃ ಸಂಪಾದನೆ ಮಾಡದ
ಹಣವನ್ನು ದೋಚಿಕೊಳ್ಳುವವನೂ ಸ್ವತಃ ನೀನೇ ಬೆಳೆಯದ
ದವಸಧಾನ್ಯಗಳನ್ನು ಒಟ್ಟುಗೂಡಿಸುವವನೂ! ಆಗಿರುವೆ.
ಆದ್ದರಿಂದ ನಿನಗೆ ಹೆದರಿ ನಿನ್ನ ಹಣವನ್ನು ಬಟ್ಟೆಯಲ್ಲಿ ಸುತ್ತಿ
ಬಚ್ಚಿಟ್ಟಿದ್ದೆ’’ ಎಂದನು. 22ಆಗ ಅರಸನು ಆ ಸೇವಕನಿಗೆ, ‘ನೀನು
ಕೆಟ್ಟ ಆಳು! ನಿನ್ನ ಸ್ವಂತ ಮಾತುಗಳಿಂದಲೇ ನಿನಗೆ ತೀರ್ಪು
ಮಾಡುತ್ತೇನೆ. ನನ್ನನ್ನು ಕಠಿಣ ಮನುಷ್ಯನೆಂದು ನೀನು ಹೇಳಿದೆ.
ಸ್ವತಃ ನಾನೇ ಸಂಪಾದನೆ ಮಾಡದ ಹಣವನ್ನು ನಾನು ತೆಗೆದು
ಕೊಳ್ಳುವುದಾಗಿಯೂ ಸ್ವತಃ ನಾನೇ ಬೆಳೆಯದ ದವಸಧಾನ್ಯ
ಗಳನ್ನು ನಾನು ಸಂಗ್ರಹಿಸುವುದಾಗಿಯೂ ನೀನು ಹೇಳಿದೆ.
23ಅದು ನಿಜವಾಗಿದ್ದರೆ, ನೀನು ನನ್ನ ಹಣವನ್ನು ಬಡ್ಡಿಗೆ ಕೊಡ
ಬೇಕಿತ್ತು. ನಾನು ಮರಳಿ ಬಂದಾಗ, ನನಗೆ ಸ್ವಲ್ಪ ಬಡ್ಡಿ
ಯಾದರೂ ಸಿಕ್ಕುತ್ತಿತ್ತು’ ಎಂದನು. 24ಬಳಿಕ ಅರಸನು ಅಲ್ಲಿದ್ದ
ಜನರಿಗೆ, ‘ಈ ಸೇವಕನ ಒಂದು ಸಾವಿರ ರೂಪಾಯಿ ತೆಗೆದು
ಕೊಂಡು ಹತ್ತು ಸಾವಿರ ರೂಪಾಯಿ ಸಂಪಾದಿಸಿದವನಿಗೆ
ಕೊಡಿರಿ’ ಎಂದು ಹೇಳಿದನು. 25ಆ ಜನರು ಅರಸನಿಗೆ,
‘ಸ್ವಾಮೀ, ಆ ಸೇವಕನ ಬಳಿ ಈಗಾಗಲೇ ಹತ್ತುಸಾವಿರ
ರೂಪಾಯಿ ಇದೆಯಲ್ಲಾ!’ ಎಂದು ಹೇಳಿದರು. 26ಅರಸನು,
‘ತನ್ನಲ್ಲಿರುವುದನ್ನು ಉಪಯೋಗಿಸುವವನು ಹೆಚ್ಚು ಪಡೆ
ಯುವನು. ಆದರೆ ತನ್ನಲ್ಲಿರುವುದನ್ನು ಉಪಯೋಗಿಸದವನಿಂದ
ಇದ್ದದ್ದನ್ನೂ ತೆಗೆದುಕೊಳ್ಳಲಾಗುವುದು. 27ಈಗ ನನ್ನ ವೈರಿ
ಗಳೆಲ್ಲಿ? ನಾನು ಅರಸನಾಗುವುದನ್ನು ವಿರೋಧಿಸಿದ ಜನರೆಲ್ಲಿ?
ನನ್ನ ವೈರಿಗಳನ್ನು ಇಲ್ಲಿಗೆ ಕರೆದುಕೊಂಡು ಬಂದು ನನ್ನ
ಕಣ್ಣೆದುರಿನಲ್ಲಿಯೇ ಕೊಲ್ಲಿರಿ!’ ಎಂದು ಹೇಳಿದನು.’’

### ಜೆರುಸಲೇಮಿಗೆ ಯೇಸುವಿನ ಪ್ರವೇಶ

(ಮತ್ತಾಯ 21:1-11; ಮಾರ್ಕ 11:1-11; ಯೋಹಾನ 12:12-19)

28ಯೇಸು ಈ ಸಂಗತಿಗಳನ್ನು ಹೇಳಿದ ನಂತರ ಜೆರುಸ
ಲೇಮಿನ ಕಡೆಗೆ ಪ್ರಯಾಣ ಮುಂದುವರಿಸಿದನು. 29ಯೇಸು
ಬೇತ್ಫಗೆ ಮತ್ತು ಬೆಥಾನಿಯ ಎಂಬ ಊರುಗಳ ಸಮೀಪಕ್ಕೆ
ಬಂದನು. ಈ ಊರುಗಳು ಆಲಿವ್ ಮರಗಳ ಬೆಟ್ಟ* ಎಂದು
ಕರೆಯಲ್ಪಟ್ಟ ಗುಡ್ಡದ ಹತ್ತಿರವಿತ್ತು. ಯೇಸು ಇಬ್ಬರು ಶಿಷ್ಯರನ್ನು
ಕರೆದು ಅವರಿಗೆ, 30‘‘ಅಲ್ಲಿ ಕಾಣುವ ಊರಿಗೆ ಹೋಗಿರಿ. ನೀವು
ಆ ಊರನ್ನು ಪ್ರವೇಶಿಸಿದಾಗ ಕಟ್ಟಿಹಾಕಿರುವ ಪ್ರಾಯದ
ಕತ್ತೆಯನ್ನು ಕಾಣುವಿರಿ. ಈ ಕತ್ತೆಯ ಮೇಲೆ ಯಾರೂ
ಇದುವರೆಗೆ ಸವಾರಿ ಮಾಡಿಲ್ಲ. ಆ ಕತ್ತೆಯನ್ನು ಬಿಚ್ಚಿಕೊಂಡು
ಇಲ್ಲಿಗೆ ಬನ್ನಿರಿ. 31ನೀವು ಏಕೆ ಈ ಕತ್ತೆಯನ್ನು ತೆಗೆದುಕೊಂಡು
ಹೋಗುತ್ತಿದ್ದೀರೆಂದು ಯಾರಾದರೂ ನಿಮ್ಮನ್ನು ಕೇಳಿದರೆ,
‘ಗುರುವಿಗೆ ಈ ಕತ್ತೆ ಬೇಕಾಗಿದೆ’ ಎಂದು ಹೇಳಿರಿ’’ ಎಂದನು.

32ಆ ಇಬ್ಬರು ಶಿಷ್ಯರು ಪಟ್ಟಣದೊಳಕ್ಕೆ ಹೋದರು. ಯೇಸು
ಅವರಿಗೆ ಹೇಳಿದ ಪ್ರಕಾರವೇ ಅವರು ಕತ್ತೆಯನ್ನು ಕಂಡು
33ಅದನ್ನು ಬಿಚ್ಚಿದರು. ಆದರೆ ಕತ್ತೆಯ ಯಜಮಾನ ಹೊರಗೆ
ಬಂದು ಶಿಷ್ಯರಿಗೆ, ‘‘ಆ ಕತ್ತೆಯನ್ನು ನೀವು ಏಕೆ ಬಿಚ್ಚುತ್ತಿದ್ದೀರಿ’’
ಎಂದು ಕೇಳಿದನು.

34ಶಿಷ್ಯರು, ‘ಪ್ರಭುವಿಗೆ ಇದು ಬೇಕಾಗಿದೆ’ ಎಂದು
ಉತ್ತರಿಸಿದರು. 35ಹೀಗೆ ಶಿಷ್ಯರು ಆ ಕತ್ತೆಯನ್ನು ಯೇಸುವಿನ
ಬಳಿಗೆ ತಂದರು. ಶಿಷ್ಯರು ತಮ್ಮ ಬಟ್ಟೆಗಳನ್ನು ಕತ್ತೆಯ ಬೆನ್ನಿನ
ಮೇಲೆ ಹಾಕಿ ಯೇಸುವನ್ನು ಕತ್ತೆಯ ಮೇಲೆ ಕುಳ್ಳಿರಿಸಿದರು.
36ಯೇಸು ಜೆರುಸಲೇಮಿನ ಕಡೆಗೆ ಪ್ರಯಾಣ ಮಾಡಿದನು.
ಶಿಷ್ಯರು ತಮ್ಮ ಬಟ್ಟೆಗಳನ್ನು ರಸ್ತೆಯಲ್ಲಿ ಯೇಸುವಿನ ಮುಂದೆ
ಹಾಸಿದರು. 37ಯೇಸು ಜೆರುಸಲೇಮಿಗೆ ಸಮೀಪಿಸಿ ಆಲಿವ್
ಮರಗಳ ಗುಡ್ಡದ ಬಳಿಗೆ ಬಂದನು. ಆತನನ್ನು ಹಿಂಬಾಲಿಸುತ್ತಿದ್ದ
ಶಿಷ್ಯ ಸಮೂಹದಲ್ಲಿದ್ದವರೆಲ್ಲರೂ ಸಂತೋಷಪಡುತ್ತಾ ತಾವು
ನೋಡಿದ ಎಲ್ಲಾ ಮಹತ್ಕಾರ್ಯಗಳಿಗಾಗಿ ದೇವರನ್ನು
ಸ್ತುತಿಸಿದರು. 38ಅವರು,

‘‘ಪ್ರಭುವಿನ ಹೆಸರಿನಲ್ಲಿ ಬರುವ ಅರಸನಿಗೆ
ಆಶೀರ್ವಾದವಾಗಲಿ! *ಕೀರ್ತನೆ 118:26*

ಪರಲೋಕದಲ್ಲಿ ಸಮಾಧಾನವಾಗಲಿ; ದೇವರಿಗೆ
ಮಹಿಮೆಯಾಗಲಿ’’ ಎಂದು ಆರ್ಭಟಿಸಿದರು.

---

**ದೂರದೇಶ** ಬಹುಶಃ ರೋಮ್‌ನಗರ. ಅರಸರು ರೋಮ್ ಚಕ್ರವರ್ತಿ ಯಿಂದ ನೇಮಿಸಲ್ಪಡುತ್ತಿದ್ದರು.

**ಆಲಿವ್ ಮರಗಳ ಬೆಟ್ಟ** ಜೆರುಸಲೇಮ್ ನಗರದ ಹತ್ತಿರವಿರುವ ಒಂದು ಗುಡ್ಡ.

[39]ಫರಿಸಾಯರಲ್ಲಿ ಕೆಲವರು, ‘‘ಬೋಧಕನೇ, ಈ ರೀತಿಯೆಲ್ಲಾ ಹೇಳಕೂಡದೆಂದು ನಿನ್ನ ಶಿಷ್ಯರಿಗೆ ಹೇಳು!’’ ಅಂದರು.

[40]ಅದಕ್ಕೆ ಯೇಸು, ‘‘ಅವರು ಹೀಗೆ ಹೇಳಲೇಬೇಕು. ಒಂದುವೇಳೆ ಅವರು ಹೀಗೆ ಹೇಳದಿದ್ದರೆ, ಈ ಕಲ್ಲುಗಳೇ ಅವರ ಬದಲಾಗಿ ಹೇಳುತ್ತವೆ ಎಂದು ನಿಮಗೆ ಹೇಳುತ್ತೇನೆ’’ ಎಂಬುದಾಗಿ ಉತ್ತರಿಸಿದನು.

## ಜೆರುಸಲೇಮಿನ ವಿಷಯದಲ್ಲಿ ಯೇಸು ಅತ್ತನು

[41]ಯೇಸು ಜೆರುಸಲೇಮಿನ ಸಮೀಪಕ್ಕೆ ಬಂದಾಗ ಆ ಪಟ್ಟಣವನ್ನು ನೋಡಿ ಅದರ ವಿಷಯದಲ್ಲಿ ಕಣ್ಣೀರಿಟ್ಟು [42]ಜೆರುಸಲೇಮಿಗೆ, ‘‘ನಿನಗೆ ಯಾವುದರಿಂದ ಸಮಾಧಾನವಾಗುತ್ತದೆ ಎಂಬುದನ್ನು ನೀನು ಇಂದೇ ತಿಳಿದುಕೊಂಡಿದ್ದರೆ ಎಷ್ಟೋ ಒಳ್ಳೆಯದಾಗಿತ್ತು! ಆದರೆ ನೀನು ಅದನ್ನು ತಿಳಿಯಲಾರೆ, ಏಕೆಂದರೆ ಅದು ನಿನಗೆ ಮರೆಯಾಗಿದೆ. [43]ನಿನ್ನ ವೈರಿಗಳು ನಿನ್ನ ಸುತ್ತಲೂ ಗೋಡೆ ಕಟ್ಟಿ ನಿನ್ನನ್ನು ಎಲ್ಲಾ ಕಡೆಗಳಿಂದಲೂ ಮುತ್ತಿಗೆ ಹಾಕಿ, [44]ನಿನ್ನನ್ನೂ ನಿನ್ನ ಜನರೆಲ್ಲರನ್ನೂ ನಾಶಮಾಡುವರು. ನಿನ್ನ ಕಟ್ಟಡಗಳಲ್ಲಿ ಕಲ್ಲಿನ ಮೇಲೆ ಕಲ್ಲು ನಿಲ್ಲದಂತೆ ಮಾಡುವರು. ದೇವರು ನಿನ್ನನ್ನು ರಕ್ಷಿಸುವುದಕ್ಕೆ ಬಂದ ಸಮಯವನ್ನು ನೀನು ತಿಳಿದುಕೊಳ್ಳಲಿಲ್ಲವಾದ್ದರಿಂದ ಇದೆಲ್ಲಾ ನಿನಗೆ ಸಂಭವಿಸುವುದು’’ ಎಂದು ಹೇಳಿದನು.

## ದೇವಾಲಯಕ್ಕೆ ಯೇಸುವಿನ ಪ್ರವೇಶ

(ಮತ್ತಾಯ 21:12-17; ಮಾರ್ಕ 11:15-19; ಯೋಹಾನ 2:13-22)

[45]ಯೇಸು ದೇವಾಲಯದೊಳಗೆ ಹೋಗಿ, ಅಲ್ಲಿ ಮಾರಾಟ ಮಾಡುತ್ತಿದ್ದ ಜನರನ್ನೆಲ್ಲಾ ಹೊರಕ್ಕೆ ಓಡಿಸತೊಡಗಿ, [46]ಅವರಿಗೆ, ‘‘‘ನನ್ನ ಆಲಯವು ಪ್ರಾರ್ಥನಾಲಯವಾಗಿರುವುದು’ * ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ. ಆದರೆ ನೀವು ಅದನ್ನು ‘ಕಳ್ಳರ ಗವಿಯನ್ನಾಗಿ ಮಾರ್ಪಡಿಸಿದ್ದೀರಿ’ * ಎಂದನು.

[47]ಯೇಸು ದೇವಾಲಯದಲ್ಲಿ ಪ್ರತಿದಿನ ಜನರಿಗೆ ಉಪದೇಶಿಸಿದನು. ಮಹಾಯಾಜಕರು, ಧರ್ಮೋಪದೇಶಕರು ಮತ್ತು ಜನರ ನಾಯಕರಲ್ಲಿ ಕೆಲವರು ಯೇಸುವನ್ನು ಕೊಲ್ಲಲು ಬಯಸಿದರು. [48]ಆದರೆ ಜನರೆಲ್ಲರೂ ಯೇಸುವಿನ ಮಾತುಗಳನ್ನು ಗಮನವಿಟ್ಟು ಕೇಳುತ್ತಿದ್ದರು. ಯೇಸು ಹೇಳಿದ ವಿಷಯಗಳಲ್ಲಿ ಅವರು ಬಹಳ ಆಸಕ್ತರಾಗಿದ್ದರು. ಆದ್ದರಿಂದ ಮಹಾಯಾಜಕರಿಗೆ, ಧರ್ಮೋಪದೇಶಕರಿಗೆ ಮತ್ತು ಜನನಾಯಕರಿಗೆ ಯೇಸುವನ್ನು ಹೇಗೆ ಕೊಲ್ಲಬೇಕೆಂದೇ ತಿಳಿಯಲಿಲ್ಲ.

## ಯೆಹೂದ್ಯನಾಯಕರು ಯೇಸುವಿಗೆ ಕೇಳಿದ ಪ್ರಶ್ನೆ

(ಮತ್ತಾಯ 21:23-27; ಮಾರ್ಕ 11:27-33)

20 ಒಂದು ದಿನ ಯೇಸು ದೇವಾಲಯದಲ್ಲಿದ್ದನು. ಆತನು ಜನರಿಗೆ ಉಪದೇಶಿಸುತ್ತಾ ಸುವಾರ್ತೆಯನ್ನು ತಿಳಿಸಿದನು. ಮಹಾಯಾಜಕರು, ಧರ್ಮೋಪದೇಶಕರು ಮತ್ತು ಹಿರಿಯ ಯೆಹೂದ್ಯ ನಾಯಕರು ಯೇಸುವಿನ ಬಳಿಗೆ ಬಂದು, [2]‘‘ನಮಗೆ ಹೇಳು! ನೀನು ಯಾವ ಅಧಿಕಾರದಿಂದ ಈ ಸಂಗತಿಗಳನ್ನು ಮಾಡುತ್ತಿರುವೆ? ಈ ಅಧಿಕಾರವನ್ನು ನಿನಗೆ ಯಾರು ಕೊಟ್ಟರು?’’ ಎಂದು ಕೇಳಿದರು.

[3]ಯೇಸು, ‘‘ನಾನೂ ನಿಮಗೊಂದು ಪ್ರಶ್ನೆಯನ್ನು ಕೇಳುತ್ತೇನೆ. [4]ಜನರಿಗೆ ದೀಕ್ಷಾಸ್ನಾನ ಮಾಡಿಸುವ ಅಧಿಕಾರವು ಯೋಹಾನನಿಗೆ ದೇವರಿಂದ ಬಂತೋ ಅಥವಾ ಮನುಷ್ಯರಿಂದ ಬಂತೋ? ನನಗೆ ಹೇಳಿರಿ’’ ಎಂದು ಉತ್ತರಕೊಟ್ಟನು.

[5]ಅವರೆಲ್ಲರೂ ಇದರ ಬಗ್ಗೆ ಒಟ್ಟಾಗಿ ಚರ್ಚಿಸಿ ಒಬ್ಬರಿಗೊಬ್ಬರು, ‘‘ದೀಕ್ಷಾಸ್ನಾನ ಮಾಡಿಸುವ ಅಧಿಕಾರ ಯೋಹಾನನಿಗೆ ದೇವರಿಂದ ಬಂತು’ ಎಂದು ಉತ್ತರ ಕೊಟ್ಟರೆ, ‘ಹಾಗಾದರೆ ನೀವು ಯೋಹಾನನನ್ನು ಏಕೆ ನಂಬಲಿಲ್ಲ?’ ಎಂದು ಆತನು ಕೇಳುವನು. [6]ದೀಕ್ಷಾಸ್ನಾನ ಮಾಡಿಸುವ ಅಧಿಕಾರ ಯೋಹಾನನಿಗೆ ಮನುಷ್ಯರಿಂದ ಬಂತು’ ಎಂದು ಹೇಳಿದರೆ, ಜನರೆಲ್ಲರೂ ಕಲ್ಲೆಸೆದು ನಮ್ಮನ್ನು ಕೊಲ್ಲುವರು. ಏಕೆಂದರೆ ಯೋಹಾನನು ಪ್ರವಾದಿಯಾಗಿದ್ದನೆಂದು ಅವರು ನಂಬಿದ್ದಾರೆ’’’ ಅಂದುಕೊಂಡರು. [7]ಬಳಿಕ ಅವರು, ‘‘ನಮಗೆ ಗೊತ್ತಿಲ್ಲ’’ ಎಂದು ಉತ್ತರ ಕೊಟ್ಟರು.

[8]ಯೇಸು ಅವರಿಗೆ, ‘‘ಹಾಗಾದರೆ, ಈ ಸಂಗತಿಗಳನ್ನು ಯಾವ ಅಧಿಕಾರದಿಂದ ಮಾಡುತ್ತಿದ್ದೇನೆಂಬದನ್ನು ನಾನೂ ನಿಮಗೆ ಹೇಳುವುದಿಲ್ಲ’’ಅಂದನು.

## ದೇವರು ತನ್ನ ಮಗನನ್ನು ಕಳುಹಿಸಿದನು

(ಮತ್ತಾಯ 21:33-46; ಮಾರ್ಕ 12:1-12)

[9]ಬಳಿಕ ಯೇಸು ಜನರಿಗೆ ಈ ಸಾಮ್ಯವನ್ನು ಹೇಳಿದನು: ‘‘ಒಬ್ಬ ಮನುಷ್ಯನು ಒಂದು ದ್ರಾಕ್ಷಿತೋಟವನ್ನು ಮಾಡಿ ಅದನ್ನು ಕೆಲವು ರೈತರಿಗೆ ಗುತ್ತಿಗೆಗೆ ಕೊಟ್ಟನು. ಬಳಿಕ ಅವನು ಅಲ್ಲಿಂದ ಬೇರೊಂದು ದೇಶಕ್ಕೆ ಹೋಗಿ ಅಲ್ಲಿ ಬಹುಕಾಲ ಇದ್ದನು. [10]ಸ್ವಲ್ಪ ಕಾಲದ ನಂತರ ದ್ರಾಕ್ಷಿಹಣ್ಣನ್ನು ಕೀಳುವ ಸಮಯ ಬಂತು. ಆದ್ದರಿಂದ ಅವನು ತನ್ನ ಪಾಲಿನ ಹಣ್ಣನ್ನು ತೆಗೆದುಕೊಂಡು ಬರುವುದಕ್ಕಾಗಿ ತನ್ನ ಸೇವಕನನ್ನು ಆ ರೈತರ ಬಳಿಗೆ ಕಳುಹಿಸಿದನು. ಆದರೆ ಆ ರೈತರು ಆ ಸೇವಕನನ್ನು ಹೊಡೆದು ಬರಿಗೈಯಲ್ಲಿ ಕಳುಹಿಸಿಬಿಟ್ಟರು. [11]ಆದ್ದರಿಂದ ಅವನು ಇನ್ನೊಬ್ಬ ಸೇವಕನನ್ನು ಕಳುಹಿಸಿದನು. ರೈತರು ಈ ಸೇವಕನನ್ನೂ ಹೊಡೆದು, ಅವಮಾನ ಮಾಡಿ, ಬರಿಗೈಯಲ್ಲಿ ಕಳುಹಿಸಿಬಿಟ್ಟರು. [12]ಆದ್ದರಿಂದ ಅವನು ಮೂರನೆಯ ಸಲ ತನ್ನ ಮತ್ತೊಬ್ಬ ಸೇವಕನನ್ನು ರೈತರ ಬಳಿಗೆ ಕಳುಹಿಸಿದನು. ಆ ರೈತರು ಅವನನ್ನೂ ಗಾಯವಾಗುವಷ್ಟು ಹೊಡೆದು ಹೊರಗೆ ಅಟ್ಟಿದರು. [13]ಆಗ ತೋಟದ ಯಜಮಾನನು, ‘ನಾನೀಗ ಏನು ಮಾಡಲಿ? ನಾನು ನನ್ನ ಪ್ರಿಯ ಮಗನನ್ನು ಕಳುಹಿಸುವೆನು. ಒಂದುವೇಳೆ, ಆ ರೈತರು ಅವನಿಗೆ ಮರ್ಯಾದೆ ಕೊಡಬಹುದು’ ಅಂದುಕೊಂಡನು. [14]ಆ ರೈತರು ಮಗನನ್ನು ನೋಡಿ, ಒಬ್ಬರಿಗೊಬ್ಬರು, ‘ಇವನು ಧಣಿಯ ಮಗನು. ಈ ಹೊಲ ಇವನಿಗೇ ಸೇರುತ್ತದೆ. ನಾವು ಇವನನ್ನು ಕೊಂದರೆ, ಆಗ ಹೊಲವೆಲ್ಲಾ ನಮ್ಮದಾಗುತ್ತದೆ’ ಎಂದು ಮಾತಾಡಿಕೊಂಡರು. [15]ಬಳಿಕ ಆ ಮಗನನ್ನು ತೋಟದಿಂದ ಹೊರಕ್ಕೆ ನೂಕಿಕೊಂಡು ಹೋಗಿ ಕೊಂದುಹಾಕಿದರು.

‘‘ಆಗ ತೋಟದ ಯಜಮಾನನು ಏನು ಮಾಡುವನು? [16]ಅವನು ಬಂದು ಆ ರೈತರನ್ನು ಕೊಲ್ಲುವನು! ಬಳಿಕ ಅವನು ಆ ತೋಟವನ್ನು ಬೇರೆ ಕೆಲವು ರೈತರಿಗೆ ಕೊಡುವನು.’’

---

**ನನ್ನ … ಪ್ರಾರ್ಥನಾಲಯವಾಗಿರುವುದು** ಯೆಶಾಯ 56:7

**ಕಳ್ಳರ … ಮಾರ್ಪಡಿಸಿದ್ದೀರಿ** ಯೆರೆಮೀಯ 7:11

ಜನರು ಈ ಸಾಮ್ಯವನ್ನು ಕೇಳಿ, ‘‘ಇಲ್ಲ! ಹಾಗೆಂದಿಗೂ ಆಗಬಾರದು!’’ ಅಂದರು. [17]ಆದರೆ ಯೇಸು ಅವರನ್ನು ದೃಷ್ಟಿಸಿ ನೋಡಿ, ‘‘ಹಾಗಾದರೆ

‘ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ ಮೂಲೆ
ಗಲ್ಲಾಯಿತು’ ಎಂಬ ವಚನದ ಅರ್ಥವೇನು?
*ಕೀರ್ತನೆ 118:22*

[18]ಆ ಕಲ್ಲಿನ ಮೇಲೆ ಬೀಳುವ ಪ್ರತಿಯೊಬ್ಬನು ತುಂಡು ತುಂಡಾಗುವನು. ಆ ಕಲ್ಲು ನಿಮ್ಮ ಮೇಲೆ ಬಿದ್ದರೆ, ಅದು ನಿಮ್ಮನ್ನು ಸಹ ಜಜ್ಜಿ ಹಾಕುವುದು!’’ ಎಂದು ಹೇಳಿದನು.

[19]ಯೇಸು ಹೇಳಿದ ಈ ಸಾಮ್ಯವನ್ನು ಯೆಹೂದ್ಯ ನಾಯಕರು ಕೇಳಿದರು. ತಮ್ಮನ್ನು ಕುರಿತಾಗಿಯೇ ಆತನು ಈ ಸಾಮ್ಯವನ್ನು ಹೇಳಿದನೆಂದು ಅವರು ತಿಳಿದುಕೊಂಡರು. ಆದ್ದರಿಂದ ಅವರು ಆಗಲೇ ಯೇಸುವನ್ನು ಬಂಧಿಸಬೇಕೆಂದಿದ್ದರು. ಆದರೆ ಅವರು ಜನರಿಗೆ ಭಯಪಟ್ಟು ಆತನನ್ನು ಬಂಧಿಸಲಿಲ್ಲ.

## ಯೇಸುವನ್ನು ಮೋಸಗೊಳಿಸಲು ಯೆಹೂದ್ಯನಾಯಕರ ಪ್ರಯತ್ನ

(ಮತ್ತಾಯ 22:15-22; ಮಾರ್ಕ 12:13-17)

[20]ಆದ್ದರಿಂದ ಧರ್ಮೋಪದೇಶಕರು ಮತ್ತು ಯಾಜಕರು ಯೇಸುವನ್ನು ಬಂಧಿಸಲು ಸರಿಯಾದ ಸಮಯಕ್ಕಾಗಿ ಕಾಯ ತೊಡಗಿದರು. ಅವರು ಕೆಲವು ಜನರನ್ನು ಯೇಸುವಿನ ಬಳಿಗೆ ಕಳುಹಿಸಿದರು. ಒಳ್ಳೆಯವರಂತೆ ನಟಿಸಲು ಅವರು ಆ ಜನರಿಗೆ ಹೇಳಿಕೊಟ್ಟಿದ್ದರು. ಅವರು ಯೇಸುವಿನ ಮಾತಿನಲ್ಲಿ ಏನಾದರೂ ತಪ್ಪು ಕಂಡುಹಿಡಿಯಬೇಕೆಂದಿದ್ದರು. (ಅವರು ಏನಾದರೂ ತಪ್ಪು ಕಂಡುಹಿಡಿದರೆ, ಆಗ ಯೇಸುವನ್ನು ಆತನ ಮೇಲೆ ಅಧಿಕಾರವಿದ್ದ ರಾಜ್ಯಪಾಲನಿಗೆ ಒಪ್ಪಿಸಿಕೊಡಬಹುದಾಗಿತ್ತು.)
[21]ಆದ್ದರಿಂದ ಅವರು ಯೇಸುವಿಗೆ, ‘‘ಉಪದೇಶಕನೇ, ನೀನು ಸತ್ಯವನ್ನೇ ಹೇಳುವೆ ಮತ್ತು ಉಪದೇಶಿಸುವೆ ಎಂದು ನಮಗೆ ಗೊತ್ತಿದೆ. ನೀನು ಮುಖದಾಕ್ಷಿಣ್ಯ ಮಾಡುವವನಲ್ಲ. ದೇವರ ಮಾರ್ಗದ ಕುರಿತಾಗಿ ನೀನು ಯಾವಾಗಲೂ ಸತ್ಯವನ್ನೇ ಬೋಧಿಸುವೆ! [22] ಈಗ ಹೇಳು, ನಾವು ಸೀಸರನಿಗೆ* ತೆರಿಗೆ ಕೊಡುವುದು ಸರಿಯೋ? ತಪ್ಪೋ?’’ ಎಂದು ಕೇಳಿದರು.

[23]ಆದರೆ ಈ ಜನರು ತನಗೆ ಮೋಸಮಾಡಲು ಪ್ರಯತ್ನಿಸುತ್ತಿದ್ದಾರೆಂದು ಯೇಸುವಿಗೆ ತಿಳಿದಿತ್ತು. [24]ಆದ್ದರಿಂದ ಯೇಸು ಅವರಿಗೆ, ‘‘ನನಗೆ ಒಂದು ಬೆಳ್ಳಿ ನಾಣ್ಯವನ್ನು ತೋರಿಸಿರಿ. ಆ ನಾಣ್ಯದ ಮೇಲೆ ಯಾರ ಹೆಸರಿದೆ? ಅದರ ಮೇಲೆ ಯಾರ ಮುಖ ಚಿತ್ರವಿದೆ?’ ಎಂದು ಕೇಳಿದನು.

ಅವರು, ‘‘ಸೀಸರನದು’’ ಎಂದು ಹೇಳಿದರು.

[25]ಯೇಸು ಅವರಿಗೆ, ‘‘ಸೀಸರನದನ್ನು ಸೀಸರನಿಗೆ ಕೊಡಿರಿ; ದೇವರದನ್ನು ದೇವರಿಗೆ ಕೊಡಿರಿ’’ ಎಂದನು.

[26]ಆ ಜನರು ಆತನ ಬುದ್ಧಿವಂತಿಕೆಯ ಉತ್ತರವನ್ನು ಕೇಳಿ ಆಶ್ಚರ್ಯಪಟ್ಟು ಮರುಪ್ರಶ್ನೆ ಕೇಳದಂತಾದರು. ಜನರ ಮುಂದೆ ಯೇಸುವನ್ನು ಮಾತಿನಲ್ಲಿ ಸಿಕ್ಕಿಸಲು ಅವರಿಂದಾಗಲಿಲ್ಲ.

---

**ಸೀಸರ** ರೋಮಿನ ಚಕ್ರವರ್ತಿಗೆ ಕೊಡಲ್ಪಟ್ಟ ಹೆಸರು.

## ಯೇಸುವನ್ನು ಮೋಸಗೊಳಿಸಲು ಕೆಲವು ಸದ್ದುಕಾಯರ ಪ್ರಯತ್ನ

(ಮತ್ತಾಯ 22:23-33; ಮಾರ್ಕ 12:18-27)

[27]ಕೆಲವು ಸದ್ದುಕಾಯರು* ಯೇಸುವಿನ ಬಳಿಗೆ ಬಂದರು. (ಸತ್ತವರು ಪುನರುತ್ಥಾನ ಹೊಂದುವುದಿಲ್ಲ ಎಂದು ಸದ್ದುಕಾಯರು ನಂಬುತ್ತಾರೆ.) ಅವರು ಯೇಸುವಿಗೆ, ‘‘[28]ಉಪದೇಶಕನೇ, ಮದುವೆಯಾದ ಒಬ್ಬನು ಮಕ್ಕಳಿಲ್ಲದೆ ಸತ್ತರೆ, ಅವನ ತಮ್ಮನು ಆ ಸ್ತ್ರೀಯನ್ನು ಮದುವೆಯಾಗಿ, ಸತ್ತುಹೋದ ಸಹೋದರನಿಗಾಗಿ ಮಕ್ಕಳನ್ನು ಪಡೆಯಬೇಕೆಂದು* ಮೋಶೆಯು ಬರೆದಿದ್ದಾನಷ್ಟೆ. [29]ಒಂದು ಕಾಲದಲ್ಲಿ ಏಳು ಮಂದಿ ಸಹೋದರರಿದ್ದರು. ಮೊದಲನೆಯ ಸಹೋದರನು ಒಬ್ಬ ಸ್ತ್ರೀಯನ್ನು ಮದುವೆಯಾದನು. ಆದರೆ ಅವನು ಸತ್ತು ಹೋದನು. ಅವನಿಗೆ ಮಕ್ಕಳಿರಲಿಲ್ಲ. [30]ಆಗ ಎರಡನೆಯ ಸಹೋದರನು ಆ ಸ್ತ್ರೀಯನ್ನು ಮದುವೆಯಾದನು, ಬಳಿಕ ಅವನೂ ಸತ್ತುಹೋದನು.
[31]ಆಗ ಮೂರನೆಯ ಸಹೋದರನು ಆ ಸ್ತ್ರೀಯನ್ನು ಮದುವೆಯಾದನು. ಬಳಿಕ ಅವನೂ ಸತ್ತುಹೋದನು. ಇನ್ನುಳಿದ ಸಹೋದರರಿಗೂ ಹೀಗೆಯೇ ಆಯಿತು. ಅವರೆಲ್ಲರೂ ಮಕ್ಕಳಿಲ್ಲದೆ ಸತ್ತರು. [32]ಕೊನೆಯಲ್ಲಿ ಆ ಸ್ತ್ರೀಯೂ ಸತ್ತಳು. [33]ಆದರೆ ಆ ಏಳು ಮಂದಿ ಸಹೋದರರೂ ಆಕೆಯನ್ನು ಮದುವೆಯಾಗಿದ್ದರು. ಹೀಗಿರಲಾಗಿ, ಸತ್ತವರು ಪುನರುತ್ಥಾನ ಹೊಂದುವಾಗ, ಆ ಸ್ತ್ರೀಯು ಯಾರ ಹೆಂಡತಿಯಾಗಿರುವಳು?’’ ಎಂದು ಕೇಳಿದರು.

[34]ಯೇಸು ಸದ್ದುಕಾಯರಿಗೆ, ‘‘ಭೂಲೋಕದಲ್ಲಿ ಜನರು ಒಬ್ಬರನ್ನೊಬ್ಬರು ಮದುವೆ ಆಗುತ್ತಾರೆ. [35]ಪುನರುತ್ಥಾನಕ್ಕೆ ಯೋಗ್ಯರಾದ ಕೆಲವು ಜನರು ಜೀವಂತವಾಗಿ ಎದ್ದುಬಂದು ಮತ್ತೆ ಜೀವಿಸುತ್ತಾರೆ. ಆ ಹೊಸ ಜೀವನದಲ್ಲಿ ಅವರು ಮದುವೆ ಆಗುವುದಿಲ್ಲ. [36]ಆ ಜೀವನದಲ್ಲಿ ಅವರು ದೇವದೂತರಂತಿರುತ್ತಾರೆ. ಅವರಿಗೆ ಮರಣವೂ ಇರುವುದಿಲ್ಲ. ಅವರು ದೇವರ ಮಕ್ಕಳಾಗಿರುತ್ತಾರೆ, ಏಕೆಂದರೆ ಅವರು ಪುನರುತ್ಥಾನ ಹೊಂದಿದವರಾಗಿದ್ದಾರೆ. [37]ಸತ್ತವರು ಪುನರುತ್ಥಾನ ಹೊಂದುವುದನ್ನು ಮೋಶೆಯು ಸ್ಪಷ್ಟವಾಗಿ ತೋರಿಸಿದ್ದಾನೆ. ಉರಿಯುವ ಪೊದೆಯ* ಕುರಿತು ಮೋಶೆ ಬರೆಯುವಾಗ, ‘ಪ್ರಭುವಾದ ದೇವರೇ ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು ಯಾಕೋಬನ ದೇವರು’ ಎಂದು ಹೇಳಿದ್ದಾನೆ. [38]ದೇವರು ಅವರೆಲ್ಲರಿಗೆ ದೇವರಾಗಿರುವುದರಿಂದ ಅವರೆಲ್ಲರು ನಿಜವಾಗಿಯೂ ಸತ್ತಿಲ್ಲ. ಏಕೆಂದರೆ ದೇವರು ಜೀವಿಸುವ ಜನರಿಗೇ ದೇವರಾಗಿದ್ದಾನೆ. ದೇವರಿಗೆ ಸೇರಿದವರೆಲ್ಲರೂ ಜೀವಂತರಾಗಿದ್ದಾರೆ’’ ಎಂದು ಹೇಳಿದನು.

[39]ಧರ್ಮೋಪದೇಶಕರಲ್ಲಿ ಕೆಲವರು, ‘‘ಬೋಧಕನೇ, ನೀನು ಒಳ್ಳೆಯ ಉತ್ತರವನ್ನು ಕೊಟ್ಟಿರುವೆ’’ ಎಂದು ಹೇಳಿದರು.
[40]ಇನ್ನೊಂದು ಪ್ರಶ್ನೆಯನ್ನು ಆತನಿಗೆ ಕೇಳುವುದಕ್ಕೆ ಯಾರಿಗೂ ಧೈರ್ಯವಿರಲಿಲ್ಲ.

---

**ಸದ್ದುಕಾಯರು** ಯೆಹೂದ್ಯರ ಪ್ರಾಮುಖ್ಯ ಧಾರ್ಮಿಕ ಗುಂಪು. ಅವರು ಹಳೆ ಒಡಂಬಡಿಕೆಯ ಮೊದಲಿನ ಐದು ಪುಸ್ತಕಗಳನ್ನು ಮಾತ್ರ ಅಂಗೀಕರಿಸಿದವರಾಗಿದ್ದರು.

**ಮದುವೆ … ಪಡೆಯ** ಧರ್ಮೋಪದೇಶ. 25:5

**ಉರಿಯುವ ಪೊದೆ** ವಿಮೋಚನ. 3:1-12 ಓದಿರಿ.

### ಕ್ರಿಸ್ತನು ದಾವೀದನ ಮಗನೋ?

(ಮತ್ತಾಯ 22:41-46; ಮಾರ್ಕ 12:35-37)

[41]ಆಗ ಯೇಸು, ''ಕ್ರಿಸ್ತನು ದಾವೀದನ ಮಗನೆಂದು
ಜನರು ಏಕೆ ಹೇಳುತ್ತಾರೆ? [42]ಕೀರ್ತನೆಗಳ ಪುಸ್ತಕದಲ್ಲಿ ಸ್ವತಃ
ದಾವೀದನೇ ಇಂತೆಂದಿದ್ದಾನೆ:

'ಪ್ರಭುವು (ದೇವರು) ನನ್ನ ಪ್ರಭುವಿಗೆ (ಕ್ರಿಸ್ತನಿಗೆ)
ಹೇಳಿದ್ದೇನೆಂದರೆ,
[43] ನಾನು ನಿನ್ನ ವೈರಿಗಳನ್ನು ನಿನ್ನ ಪಾದಪೀಠವನ್ನಾಗಿ
ಮಾಡುವ ತನಕ ನನ್ನ ಬಲಗಡೆಯಲ್ಲೇ ಕುಳಿತು
ಕೊಂಡಿರು.'

*ಕೀರ್ತನೆ 110:1*

[44]ದಾವೀದನು ಕ್ರಿಸ್ತನನ್ನು 'ಪ್ರಭು'ವೆಂದು ಕರೆದ ಮೇಲೆ
ಆತನು ಅವನಿಗೆ ಮಗನಾಗಲು ಹೇಗೆ ಸಾಧ್ಯ?'' ಎಂದು
ಹೇಳಿದನು.

### ಧರ್ಮೋಪದೇಶಕರ ಬಗ್ಗೆ ಎಚ್ಚರಿಕೆ

(ಮತ್ತಾಯ 23:1-36; ಮಾರ್ಕ 12:38-40; ಲೂಕ 11:37-54)

[45]ಜನರೆಲ್ಲರೂ ಯೇಸುವಿನ ಮಾತನ್ನು ಆಲಿಸಿದರು.
ಯೇಸು ತನ್ನ ಶಿಷ್ಯರಿಗೆ, [46]''ಧರ್ಮೋಪದೇಶಕರ ಕುರಿತು
ಎಚ್ಚರಿಕೆಯಾಗಿರಿ. ಅವರು ಪ್ರಾಮುಖ್ಯ ವ್ಯಕ್ತಿಗಳಂತೆ ಬಟ್ಟೆ
ಧರಿಸಿಕೊಂಡು ತಿರುಗಾಡುತ್ತಾರೆ. ಮಾರುಕಟ್ಟೆಗಳಲ್ಲಿ ಜನರಿಂದ
ಗೌರವ ಹೊಂದಲು ಆಶಿಸುತ್ತಾರೆ. ಸಭಾಮಂದಿರಗಳಲ್ಲಿ ಮತ್ತು
ಔತಣ ಕೂಟಗಳಲ್ಲಿ ಉನ್ನತವಾದ ಆಸನಗಳನ್ನು ಆಶಿಸುತ್ತಾರೆ.
[47]ಆದರೆ ಅವರು ವಿಧವೆಯರಿಗೆ ಮೋಸಮಾಡಿ ಅವರ ಮನೆ
ಗಳನ್ನು ಕಸಿದುಕೊಳ್ಳುತ್ತಾರೆ. ಬಳಿಕ ಉದ್ದವಾದ ಪ್ರಾರ್ಥನೆ
ಗಳನ್ನು ಮಾಡಿ ಒಳ್ಳೆಯವರಂತೆ ನಟಿಸುತ್ತಾರೆ. ದೇವರು
ಇವರನ್ನು ಕಠಿಣವಾದ ದಂಡನೆಗೆ ಗುರಿಪಡಿಸುತ್ತಾನೆ'' ಎಂದು
ಹೇಳಿದನು.

### ನಿಜವಾದ ಕೊಡುವಿಕೆ

(ಮಾರ್ಕ 12:41-44)

**21** ಕೆಲವು ಐಶ್ವರ್ಯವಂತರು ದೇವಾಲಯದ ಹಣದ
ಪೆಟ್ಟಿಗೆಯಲ್ಲಿ* ದೇವರಿಗಾಗಿ ತಮ್ಮ ಕಾಣಿಕೆಗಳನ್ನು
ಹಾಕುವುದನ್ನು ಯೇಸು ಗಮನಿಸಿದನು. [2]ಅಷ್ಟರಲ್ಲಿ ಒಬ್ಬ ಬಡ
ವಿಧವೆಯು ಬಂದು ಎರಡು ಚಿಕ್ಕನಾಣ್ಯಗಳನ್ನು ಪೆಟ್ಟಿಗೆಯಲ್ಲಿ
ಹಾಕಿದಳು. [3]ಅದನ್ನು ಕಂಡ ಯೇಸು, ''ನಿಮಗೆ ಸತ್ಯವಾಗಿ
ಹೇಳುತ್ತೇನೆ. ಈ ಬಡ ವಿಧವೆ ಕೇವಲ ಎರಡು ಚಿಕ್ಕ ತಾಮ್ರದ
ನಾಣ್ಯಗಳನ್ನು ಕೊಟ್ಟಳು. ಆದರೆ ಆಕೆ ನಿಜವಾಗಿಯೂ, ಆ
ಐಶ್ವರ್ಯವಂತರೆಲ್ಲರಿಗಿಂತ ಹೆಚ್ಚುಕೊಟ್ಟಳು. [4]ಐಶ್ವರ್ಯ
ವಂತರಿಗೆ ಬೇಕಾದಷ್ಟು ಇದೆ. ಅವರು ಕೇವಲ ತಮಗೆ ಅವಶ್ಯ
ವಿಲ್ಲದ್ದನ್ನು ಕೊಟ್ಟರು. ಈ ಸ್ತ್ರೀ ಬಹಳ ಬಡವಳಾಗಿದ್ದರೂ ತನ್ನಲ್ಲಿ
ಇದ್ದದ್ದೆಲ್ಲವನ್ನೂ ಕೊಟ್ಟಳು. ಈಕೆಗೆ ಆ ಹಣದ ಅವಶ್ಯವಿತ್ತು''
ಎಂದು ಹೇಳಿದನು.

### ದೇವಾಲಯದ ನಾಶನ

(ಮತ್ತಾಯ 24:1-14; ಮಾರ್ಕ 13:1-13)

[5]ಶಿಷ್ಯರಲ್ಲಿ ಕೆಲವರು ದೇವಾಲಯದ ಕುರಿತು ಮಾತಾ
ಡುತ್ತಾ, ''ಇದು ಅಂದವಾದ ಕಲ್ಲುಗಳಿಂದಲೂ ಹರಕೆಯ
ಕೊಡುಗೆಗಳಿಂದಲೂ ಎಷ್ಟೊಂದು ಸುಂದರವಾಗಿದೆ!''
ಎಂದರು.
[6]ಆದರೆ ಯೇಸು ಅವರಿಗೆ, ''ನೀವು ಇಲ್ಲಿ ನೋಡು
ವಂಥದ್ದೆಲ್ಲವೂ ನಾಶವಾಗುವ ಕಾಲ ಬರುವುದು. ಈ ಕಟ್ಟಡಗಳ
ಪ್ರತಿಯೊಂದು ಕಲ್ಲನ್ನು ನೆಲಕ್ಕೆ ಕೆಡವಲಾಗುವುದು. ಇಲ್ಲಿ ಕಲ್ಲಿನ
ಮೇಲೆ ಕಲ್ಲು ನಿಲ್ಲುವುದಿಲ್ಲ!'' ಎಂದು ಹೇಳಿದನು.
[7]ಶಿಷ್ಯರಲ್ಲಿ ಕೆಲವರು ಯೇಸುವಿಗೆ, ''ಗುರುವೇ, ಇವು
ಗಳೆಲ್ಲಾ ಯಾವಾಗ ಸಂಭವಿಸುತ್ತವೆ? ಆ ಸಮಯವನ್ನು ಯಾವ
ಸೂಚನೆಗಳಿಂದ ತಿಳಿದುಕೊಳ್ಳಬೇಕು?'' ಎಂದು ಕೇಳಿದರು.
[8]ಯೇಸು ಅವರಿಗೆ, ''ಎಚ್ಚರಿಕೆಯಾಗಿರಿ! ಮೋಸ ಹೋಗ
ಬೇಡಿರಿ. ನನ್ನ ಹೆಸರನ್ನು ಹೇಳುತ್ತಾ ಅನೇಕರು ಬರುವರು.
ಅವರು, 'ನಾನೇ ಕ್ರಿಸ್ತನು' ಎಂದೂ, 'ಸರಿಯಾದ ಸಮಯ
ಬಂದಿದೆ' ಎಂದೂ ಹೇಳುವರು. ಆದರೆ ಅವರನ್ನು ಹಿಂಬಾಲಿಸ
ಬೇಡಿರಿ. [9]ಯುದ್ಧಗಳ ಬಗ್ಗೆ ಮತ್ತು ದೊಂಬಿಗಳ ಬಗ್ಗೆ ನೀವು
ಕೇಳುವಾಗ ಹೆದರಬೇಡಿರಿ. ಇವುಗಳೆಲ್ಲಾ ಮೊದಲು ಸಂಭವಿಸ
ಬೇಕು. ಆದರೂ ಆ ಕೂಡಲೇ ಅಂತ್ಯ ಬರುವುದಿಲ್ಲ'' ಎಂದು
ಹೇಳಿದನು.
[10]ಬಳಿಕ ಯೇಸು ಅವರಿಗೆ, ''ಜನಾಂಗಗಳು ಬೇರೆ
ಜನಾಂಗಗಳಿಗೆ ವಿರುದ್ಧವಾಗಿ ಹೋರಾಡುವವು. ರಾಜ್ಯಗಳು
ಬೇರೆ ರಾಜ್ಯಗಳಿಗೆ ವಿರುದ್ಧವಾಗಿ ಹೋರಾಡುವವು. [11]ಭೀಕರ
ಭೂಕಂಪಗಳಾಗುವವು. ಕ್ಷಾಮಗಳೂ ಉಪದ್ರವಗಳೂ
ತಲೆದೋರುವವು. ಭಯಂಕರ ಘಟನೆಗಳೂ ಆಕಾಶದಲ್ಲಿ
ಅಪೂರ್ವ ಸೂಚನೆಗಳೂ ಕಾಣಿಸಿಕೊಳ್ಳುವವು.
[12]''ಆದರೆ ಈ ಎಲ್ಲಾ ಸಂಗತಿಗಳು ಸಂಭವಿಸುವ ಮೊದಲು,
ಜನರು ನಿಮ್ಮನ್ನು ಬಂಧಿಸುವರು ಮತ್ತು ಹಿಂಸಿಸುವರು.
ಸಭಾಮಂದಿರಗಳಲ್ಲಿ ಜನರು ನಿಮಗೆ ತೀರ್ಪು ನೀಡಿ ಸೆರೆಮನೆಗೆ
ಹಾಕುವರು. ರಾಜರ ಮುಂದೆ ಮತ್ತು ರಾಜ್ಯಪಾಲರ ಮುಂದೆ
ನಿಮ್ಮನ್ನು ಬಲವಂತವಾಗಿ ನಿಲ್ಲಿಸುವರು. ನೀವು ನನ್ನನ್ನು ಹಿಂಬಾ
ಲಿಸುವುದರಿಂದ, ಜನರು ನಿಮಗೆ ಹೀಗೆಲ್ಲಾ ಮಾಡುವರು.
[13]ಆದರೆ ನನ್ನ ಕುರಿತು ಹೇಳುವುದಕ್ಕೆ ನಿಮಗೆ ಅದು ಸುಸಂದರ್ಭ
ವಾಗಿರುವುದು. [14]ನೀವು ಏನು ಹೇಳಬೇಕೆಂದು ಚಿಂತಿಸಬೇಡಿರಿ.
[15]ಏಕೆಂದರೆ ನಾನೇ ನಿಮಗೆ ಜ್ಞಾನವನ್ನು ಕೊಡುತ್ತೇನೆ. ಆದ್ದ
ರಿಂದ ನಿಮ್ಮ ವೈರಿಗಳಲ್ಲಿ ಯಾರೂ ನಿಮ್ಮ ಮಾತಿಗೆ ಪ್ರತ್ಯು
ತ್ತರವನ್ನು ಕೊಡಲು ಸಾಧ್ಯವಿಲ್ಲ. [16]ನಿಮ್ಮ ತಂದೆತಾಯಿಗಳು,
ಸಹೋದರರು, ಸಂಬಂಧಿಕರು ಮತ್ತು ಸ್ನೇಹಿತರು ಸಹ ನಿಮಗೆ
ವಿರುದ್ಧವಾಗುವರು. ನಿಮ್ಮಲ್ಲಿ ಕೆಲವರನ್ನು ಅವರು ಕೊಲ್ಲು
ವರು. [17]ನೀವು ನನ್ನನ್ನು ಹಿಂಬಾಲಿಸುವದರಿಂದ ಜನರೆಲ್ಲರೂ
ನಿಮ್ಮನ್ನು ದ್ವೇಷಿಸುವರು. [18]ಆದರೆ ಇವುಗಳಿಂದ ನೀವೇನೂ
ನಾಶವಾಗುವುದಿಲ್ಲ. [19]ನೀವು ನಿಮ್ಮ ನಂಬಿಕೆಯಲ್ಲಿ ದೃಢ
ವಾಗಿದ್ದರೆ, ನಿಮ್ಮನ್ನು ರಕ್ಷಿಸಿಕೊಳ್ಳುವಿರಿ.

---

**ಹಣದ ಪೆಟ್ಟಿಗೆ** ಜನರು ತಮ್ಮ ಕಾಣಿಕೆಗಳನ್ನು ದೇವರಿಗೆ ಸಮರ್ಪಿಸು
ವುದಕ್ಕೆ ಯೆಹೂದ್ಯರ ಆರಾಧನೆಯ ಸ್ಥಳದಲ್ಲಿ ಇಡಲ್ಪಟ್ಟ ವಿಶೇಷ ಪೆಟ್ಟಿಗೆ.

### ಜೆರುಸಲೇಮಿನ ನಾಶನ

(ಮತ್ತಾಯ 24:15-21; ಮಾರ್ಕ 13:14-19)

[20]‘‘ಜೆರುಸಲೇಮಿನ ಸುತ್ತಲೂ ಸೈನ್ಯಗಳು ಮುತ್ತಿಗೆ
ಹಾಕುವುದನ್ನು ನೀವು ನೋಡುವಿರಿ. ಆಗ ಜೆರುಸಲೇಮಿನ
ನಾಶನದ ಕಾಲ ಬಂತೆಂದು ನೀವು ತಿಳಿದುಕೊಳ್ಳಿರಿ. [21]ಆ
ಕಾಲದಲ್ಲಿ ಜುದೇಯದಲ್ಲಿರುವ ಜನರು ಬೆಟ್ಟಗಳಿಗೆ ಓಡಿ
ಹೋಗಲಿ. ಜೆರುಸಲೇಮಿನಲ್ಲಿರುವ ಜನರು ಬೇಗನೆ ಅಲ್ಲಿಂದ
ಪಲಾಯನ ಮಾಡಲಿ. ನೀವು ಪಟ್ಟಣದ ಹತ್ತಿರವಿದ್ದರೂ
ಅದರೊಳಗೆ ಹೋಗದಿರಿ! [22]ದೇವರು ತನ್ನ ಜನರನ್ನು ಶಿಕ್ಷಿಸುವ
ಕಾಲದ ಬಗ್ಗೆ ಪ್ರವಾದಿಗಳು ಬರೆದಿರುವ ಸಂಗತಿಗಳೆಲ್ಲಾ ಆಗ
ನೆರವೇರುತ್ತದೆ. [23]ಆ ಕಾಲದಲ್ಲಿ, ಗರ್ಭಿಣಿ ಸ್ತ್ರೀಯರಿಗೂ ಚಿಕ್ಕ
ಕೂಸುಗಳಿರುವವರಿಗೂ ಬಹಳ ಗೋಳಾಟ ಇರುವುದು.
ಏಕೆಂದರೆ ಈ ದೇಶವು ಮಹಾ ವಿಪತ್ತಿಗೆ ಈಡಾಗುವುದು.
ದೇವರು ಈ ಜನರ (ಯೆಹೂದ್ಯರ) ವಿಷಯದಲ್ಲಿ ಕೋಪ
ಗೊಂಡಿರುವುದರಿಂದ [24]ಇವರಲ್ಲಿ ಕೆಲವರು ಸೈನಿಕರಿಂದ ಕೊಲ್ಲ
ಲ್ಪಡುವರು. ಇನ್ನು ಕೆಲವರು ಬಂಧಿತರಾಗಿ ಪರದೇಶಕ್ಕೆ ಒಯ್ಯ
ಲ್ಪಡುವರು. ಅನ್ಯದೇಶೀಯರು ತಮ್ಮ ಕಾಲ ಮುಗಿಯುವ ತನಕ
ಪರಿಶುದ್ಧ ಪಟ್ಟಣವಾದ ಜೆರುಸಲೇಮಿನಲ್ಲಿ ನಡೆದಾಡುವರು.

### ಭಯಪಡಬೇಡಿರಿ

(ಮತ್ತಾಯ 24:29-31; ಮಾರ್ಕ 13:24-27)

[25]‘‘ಸೂರ್ಯ, ಚಂದ್ರ ಮತ್ತು ನಕ್ಷತ್ರಗಳಲ್ಲಿ ವಿಚಿತ್ರವಾದ
ಸೂಚನೆಗಳು ಕಾಣಿಸಿಕೊಳ್ಳುವವು. ಮೊರೆಯುವ ತೆರೆಗಳ
ಹಾಗೂ ಭೋರ್ಗರೆಯುವ ಸಮುದ್ರದ ನಿಮಿತ್ತ ಭೂಮಿಯಲ್ಲಿ
ಜನಾಂಗಗಳು ದಿಕ್ಕುತೋಚದೆ ತತ್ತರಿಸಿ ಹೋಗುವವು.

[26]ಗ್ರಹಶಕ್ತಿಗಳು ಕದಲುವುದರಿಂದ ಭೂಮಿಯಲ್ಲಿ
ಏನೇನು ಸಂಭವಿಸುವುದೊ ಎಂಬ ಭಯದಿಂದ ಮನುಷ್ಯರು
ದಿಗ್ಭ್ರಮೆಗೊಳ್ಳುವರು. [27]ಆಗ ಮನುಷ್ಯಕುಮಾರನು
ಮಹಾಶಕ್ತಿಯಿಂದಲೂ ಮಹಿಮಾ ಪ್ರಭಾವದಿಂದಲೂ ಮೇಘಾ
ರೂಢನಾಗಿ ಬರುವುದನ್ನು ಜನರು ನೋಡುವರು. [28]ಈ
ಸಂಗತಿಗಳು ಸಂಭವಿಸುವುದಕ್ಕೆ ತೊಡಗುವಾಗ, ಭಯಪಡ
ಬೇಡಿರಿ. ಮೇಲೆ ನೋಡಿ ಸಂತೋಷಪಡಿರಿ! ಚಿಂತೆಮಾಡ
ಬೇಡಿರಿ. ಸಂತೋಷಪಡಿರಿ, ಏಕೆಂದರೆ ದೇವರು ನಿಮ್ಮನ್ನು
ಬಿಡುಗಡೆಗೊಳಿಸುವ ಕಾಲ ಸಮೀಪವಾಗಿದೆ ಎಂಬುದಕ್ಕೆ ಅವು
ಸೂಚನೆಯಾಗಿವೆ.’’

### ಯೇಸುವಿನ ಮಾತುಗಳಿಗೆ ಅಳಿವಿಲ್ಲ

(ಮತ್ತಾಯ 24:32-35; ಮಾರ್ಕ 13:28-31)

[29]ಬಳಿಕ ಯೇಸು ಈ ಸಾಮ್ಯವನ್ನು ಹೇಳಿದನು: ‘‘ಎಲ್ಲಾ
ಮರಗಳಲ್ಲಿ ಅಂಜೂರದ ಮರ ಒಳ್ಳೆಯ ಉದಾಹರಣೆಯಾಗಿದೆ.
[30]ಅದು ಚಿಗುರುತ್ತಲೇ ಬೇಸಿಗೆ ಹತ್ತಿರವಾಗಿದೆ ಎಂದು ನೀವು
ತಿಳಿದುಕೊಳ್ಳುವಿರಿ. [31]ಅದೇ ರೀತಿಯಲ್ಲಿ ಈ ಎಲ್ಲಾ ಸಂಗತಿಗಳು
ಸಂಭವಿಸುವುದನ್ನು ನೀವು ನೋಡುವಾಗ, ದೇವರ ರಾಜ್ಯವು
ಬಹುಬೇಗನೆ ಬರುತ್ತದೆ ಎಂದು ತಿಳಿದುಕೊಳ್ಳಿರಿ.

[32]‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಈ ಕಾಲದ
ಜನರು ಇನ್ನೂ ಜೀವಿಸುತ್ತಿರುವಾಗ ಈ ಸಂಗತಿಗಳೆಲ್ಲಾ ಸಂಭ
ವಿಸುವವು! [33]ಭೂಮ್ಯಾಕಾಶಗಳು ನಾಶವಾಗುವವು: ಆದರೆ
ನಾನು ಹೇಳಿದ ಮಾತುಗಳು ಎಂದಿಗೂ ನಾಶವಾಗುವುದಿಲ್ಲ!

### ಎಲ್ಲಾ ಸಮಯದಲ್ಲೂ ಸಿದ್ಧರಾಗಿರಿ

[34]‘‘ಎಚ್ಚರಿಕೆ! ತಿನ್ನುವುದರಲ್ಲಿಯೂ ಕುಡಿದು ಮತ್ತರಾಗು
ವುದರಲ್ಲಿಯೂ ಪ್ರಾಪಂಚಿಕ ಚಿಂತೆಗಳಲ್ಲಿಯೂ ಮಗ್ನರಾಗಿರ
ಬೇಡಿರಿ. ಇಲ್ಲವಾದರೆ, ನಿಮ್ಮ ಹೃದಯಗಳು ಭಾರವಾಗಿರು
ವಾಗಲೇ ಅಂತ್ಯವು ಫಕ್ಕನೆ ಬಂದೀತು. [35]ಆ ದಿವಸವು ಭೂನಿವಾಸಿ
ಗಳೆಲ್ಲರಿಗೂ ವಿಸ್ಮಯಕರವಾಗಿರುವುದು. [36]ಆದ್ದರಿಂದ ಎಲ್ಲಾ
ಸಮಯದಲ್ಲಿಯೂ ಸಿದ್ಧರಾಗಿರಿ. ನಡೆಯಲಿರುವ ಈ ಎಲ್ಲಾ
ಸಂಗತಿಗಳನ್ನು ಎದುರಿಸಿ ಸುರಕ್ಷಿತವಾಗಿ ಮುಂದುವರಿಯಲು
ಮತ್ತು ಮನುಷ್ಯಕುಮಾರನ ಮುಂದೆ ನಿಲ್ಲಲು ಬೇಕಾದ
ಶಕ್ತಿಗಾಗಿ ಪ್ರಾರ್ಥಿಸಿರಿ.’’

[37]ಯೇಸು ಹಗಲೆಲ್ಲಾ ದೇವಾಲಯದಲ್ಲಿ ಜನರಿಗೆ ಉಪ
ದೇಶಿಸುತ್ತಿದ್ದನು. ರಾತ್ರಿಯಲ್ಲಾದರೋ ಪಟ್ಟಣದ ಹೊರಗಿದ್ದ
ಆಲಿವ್ ಮರಗಳ ಗುಡ್ಡದ ಮೇಲೆ ಇರುತ್ತಿದ್ದನು. [38]ಪ್ರತಿ
ಮುಂಜಾನೆ, ಜನರೆಲ್ಲರೂ ಬೇಗನೆ ಎದ್ದು ದೇವಾಲಯದಲ್ಲಿ
ಯೇಸುವಿನ ಉಪದೇಶವನ್ನು ಕೇಳುವುದಕ್ಕೆ ಹೋಗುತ್ತಿದ್ದರು.

### ಯೇಸುವನ್ನು ಕೊಲ್ಲಲು ಯೆಹೂದ್ಯನಾಯಕರ ಸಂಚು

(ಮತ್ತಾಯ 26:1-5, 14-16; ಮಾರ್ಕ 14:1-2, 10-11;
ಯೋಹಾನ 11:45-53)

22 ಯೆಹೂದ್ಯರ ಹುಳಿಯಿಲ್ಲದ ರೊಟ್ಟಿಯ ಹಬ್ಬ
ಅಂದರೆ ಪಸ್ಕಹಬ್ಬವು ಹತ್ತಿರವಾಗಿತ್ತು. [2]ಮಹಾ
ಯಾಜಕರು ಮತ್ತು ಧರ್ಮೋಪದೇಶಕರು ಯೇಸುವನ್ನು ಹೇಗೆ
ಕೊಲ್ಲಬೇಕೆಂದು ಆಲೋಚಿಸುತ್ತಾ ಜನರ ಭಯದಿಂದ ತಕ್ಕ
ಮಾರ್ಗವನ್ನು ಹುಡುಕತೊಡಗಿದರು.

### ಯೇಸುವಿನ ವಿರುದ್ಧ ಯೂದನು ಮಾಡಿದ ಸಂಚು

[3]ಯೇಸುವಿನ ಹನ್ನೆರಡು ಅಪೊಸ್ತಲರಲ್ಲಿ ಇಸ್ಕರಿಯೋತ
ಯೂದನು ಒಬ್ಬನಾಗಿದ್ದನು. ಸೈತಾನನು ಇವನೊಳಗೆ ಪ್ರವೇಶಿಸಿ
ಕೆಟ್ಟ ಕಾರ್ಯವೊಂದನ್ನು ಮಾಡುವಂತೆ ಪ್ರೇರೇಪಿಸಿದನು.
[4]ಯೂದನು ಮಹಾಯಾಜಕರ ಮತ್ತು ದೇವಾಲಯವನ್ನು
ಕಾಯುತ್ತಿದ್ದ ಕೆಲವು ಸೈನಿಕರ ಬಳಿಗೆ ಹೋಗಿ, ಯೇಸುವನ್ನು
ಹಿಡಿದು ಕೊಡುವುದರ ಬಗ್ಗೆ ಅವರೊಂದಿಗೆ ಮಾತಾಡಿದನು.
[5]ಯಾಜಕರಿಗೆ ಬಹಳ ಸಂತೋಷವಾಯಿತು. ಯೇಸುವನ್ನು
ತಮಗೆ ಹಿಡಿದುಕೊಟ್ಟರೆ ಹಣಕೊಡುವುದಾಗಿ ಅವರು
ಯೂದನಿಗೆ ಮಾತುಕೊಟ್ಟರು. [6]ಯೂದನು ಅದಕ್ಕೆ ಒಪ್ಪಿದನು.
ಬಳಿಕ ಯೇಸುವನ್ನು ಅವರಿಗೆ ಹಿಡಿದುಕೊಡಲು ಉತ್ತಮವಾದ
ಸಮಯಕ್ಕಾಗಿ ಕಾಯತೊಡಗಿದನು. ತನ್ನ ಈ ಕಾರ್ಯವನ್ನು
ಯಾರಿಗೂ ತಿಳಿಯದಂಥ ಸಮಯದಲ್ಲಿ ಮಾಡಬೇಕೆಂಬುದು
ಅವನ ಬಯಕೆಯಾಗಿತ್ತು.

### ಪಸ್ಕದ ಊಟಕ್ಕೆ ಸಿದ್ಧತೆ

(ಮತ್ತಾಯ 26:17-25; ಮಾರ್ಕ 14:12-21; ಯೋಹಾನ13:21-30)

[7]ಹುಳಿಯಿಲ್ಲದ ರೊಟ್ಟಿಯನ್ನು ತಿನ್ನುವ ದಿನ ಬಂತು.
ಯೆಹೂದ್ಯರು ಪಸ್ಕದ ಕುರಿಮರಿಗಳನ್ನು ಕೊಯ್ಯುವ ದಿನ

ಅದಾಗಿತ್ತು. 8ಯೇಸುವು ಪೇತ್ರ ಮತ್ತು ಯೋಹಾನರಿಗೆ,
‘‘ಹೋಗಿ, ಪಸ್ಕದ ಊಟವನ್ನು ನಮಗಾಗಿ ಸಿದ್ಧಮಾಡಿರಿ’’
ಎಂದು ಹೇಳಿದನು.
9ಪೇತ್ರ ಮತ್ತು ಯೋಹಾನರು, ‘‘ಊಟವನ್ನು ಎಲ್ಲಿ
ಸಿದ್ಧಮಾಡಬೇಕು?’’ ಎಂದು ಯೇಸುವಿಗೆ ಕೇಳಿದರು.
10ಯೇಸು ಅವರಿಗೆ, ‘‘ಕೇಳಿರಿ! ನೀವು ಪಟ್ಟಣದೊಳಗೆ
(ಜೆರುಸಲೇಮಿನ) ಹೋದನಂತರ, ನೀರಿನ ಕೊಡವನ್ನು
ಹೊತ್ತುಕೊಂಡು ಹೋಗುವ ಒಬ್ಬ ಮನುಷ್ಯನನ್ನು ನೋಡು
ವಿರಿ. ಅವನನ್ನೇ ಹಿಂಬಾಲಿಸಿರಿ. ಅವನು ಒಂದು ಮನೆಯೊಳಗೆ
ಹೋಗುವನು. ನೀವು ಅವನೊಂದಿಗೆ ಹೋಗಿರಿ. 11ಆ ಮನೆಯ
ಯಜಮಾನನಿಗೆ, ‘ಗುರುವು ತನ್ನ ಶಿಷ್ಯರೊಂದಿಗೆ ಯಾವ
ಕೋಣೆಯಲ್ಲಿ ಪಸ್ಕದ ಊಟವನ್ನು ಮಾಡಬೇಕೆಂಬುದನ್ನು
ದಯಮಾಡಿ ತೋರಿಸು‘ ಎಂದು ಹೇಳಿರಿ. 12ಆಗ ಮನೆಯ
ಯಜಮಾನನು ಮೇಲಂತಸ್ತಿನಲ್ಲಿ ಒಂದು ದೊಡ್ಡ ಕೋಣೆ
ಯನ್ನು ತೋರಿಸುವನು. ಈ ಕೋಣೆಯು ನಿಮಗಾಗಿ ಸಿದ್ಧವಾಗಿ
ರುವುದು. ಪಸ್ಕದ ಊಟವನ್ನು ಅಲ್ಲಿ ಸಿದ್ಧಮಾಡಿರಿ’’ ಅಂದನು.
13ಆದ್ದರಿಂದ ಪೇತ್ರ ಮತ್ತು ಯೋಹಾನ ಹೊರಟರು.
ಯೇಸು ಹೇಳಿದ ಹಾಗೆ ಪ್ರತಿಯೊಂದೂ ನಡೆಯಿತು. ಅವರು
ಪಸ್ಕದ ಊಟವನ್ನು ಅಲ್ಲಿ ಸಿದ್ಧಮಾಡಿದರು.

## ಪ್ರಭುವಿನ ರಾತ್ರಿ ಭೋಜನ

(ಮತ್ತಾಯ 26:26-30; ಮಾರ್ಕ 14:22-26; 1 ಕೊರಿಂಥ. 11:23-25)

14ಪಸ್ಕಹಬ್ಬದ ಊಟ ಮಾಡುವ ಸಮಯ ಬಂತು. ಯೇಸು
ಮತ್ತು ಅಪೊಸ್ತಲರು ಮೇಜಿನ ಸುತ್ತಲೂ ಊಟಕ್ಕೆ ಕುಳಿತು
ಕೊಂಡರು. 15ಯೇಸು ಅವರಿಗೆ, ‘‘ನಾನು ಸಾಯುವ ಮೊದಲು
ಈ ಪಸ್ಕದ ಊಟ ಮಾಡಲು ಬಹಳವಾಗಿ ಅಪೇಕ್ಷಿಸಿದ್ದೇನೆ.
16ಇದರ ನಿಜವಾದ ಅರ್ಥವು ದೇವರ ರಾಜ್ಯದಲ್ಲಿ ನೆರವೇರುವ
ತನಕ, ನಾನೆಂದಿಗೂ ಇನ್ನೊಂದು ಪಸ್ಕದ ಊಟವನ್ನು ಮಾಡು
ವುದೇ ಇಲ್ಲ’’ ಅಂದನು.
17ಬಳಿಕ ಯೇಸು ದ್ರಾಕ್ಷಾರಸದ ಪಾತ್ರೆಯನ್ನು
ತೆಗೆದುಕೊಂಡು ಅದಕ್ಕಾಗಿ ದೇವರಿಗೆ ಸ್ತೋತ್ರಮಾಡಿದನು.
ಬಳಿಕ ಆತನು, ‘‘ಈ ಪಾತ್ರೆಯಲ್ಲಿರುವ ದ್ರಾಕ್ಷಾರಸವನ್ನು
ನೀವೆಲ್ಲರೂ ಹಂಚಿಕೊಳ್ಳಿರಿ. 18ದೇವರ ರಾಜ್ಯ ಬರುವ ತನಕ,
ನಾನೆಂದಿಗೂ ತಿರುಗಿ ದ್ರಾಕ್ಷಾರಸ ಕುಡಿಯುವುದಿಲ್ಲ’’ ಅಂದನು.
19ಆಮೇಲೆ ಯೇಸು ಸ್ವಲ್ಪ ರೊಟ್ಟಿಯನ್ನು ತೆಗೆದು
ಕೊಂಡನು. ಆತನು ರೊಟ್ಟಿಗಾಗಿ ದೇವರಿಗೆ ಸ್ತೋತ್ರಮಾಡಿ
ಅದನ್ನು ಮುರಿದು ಅಪೊಸ್ತಲರಿಗೆ ಕೊಟ್ಟನು. ಬಳಿಕ ಯೇಸು,
‘‘ನಾನು ನಿಮಗೋಸ್ಕರ ಕೊಡುತ್ತಿರುವ ನನ್ನ ದೇಹವಿದು.
ನನ್ನನ್ನು ನೆನಸಿಕೊಳ್ಳುವುದಕ್ಕಾಗಿ ಹೀಗೆ ಮಾಡಿರಿ’’ ಅಂದನು.
20ಅದೇ ರೀತಿಯಾಗಿ, ಊಟವಾದ ನಂತರ, ಯೇಸು ದ್ರಾಕ್ಷಾ
ರಸದ ಪಾತ್ರೆಯನ್ನು ತೆಗೆದುಕೊಂಡು, ‘‘ದೇವರು ತನ್ನ ಜನ
ರೊಂದಿಗೆ ಮಾಡಿಕೊಂಡ ಹೊಸ ಒಪ್ಪಂದವನ್ನು ಇದು ಸೂಚಿಸು
ತ್ತದೆ. ನಾನು ನಿಮಗಾಗಿ ಕೊಡುತ್ತಿರುವ ರಕ್ತದಿಂದ ಈ ಹೊಸ
ಒಪ್ಪಂದ ಪ್ರಾರಂಭವಾಗುತ್ತದೆ’’ ಅಂದನು.

## ಯೇಸುವಿಗೆ ಯಾರು ವಿರೋಧಿಗಳಾಗುವರು?

21ಯೇಸು, ‘‘ನನಗೆ ದ್ರೋಹ ಬಗೆಯುವವನು
ನನ್ನೊಂದಿಗೆ ಇದೇ ಪಂಕ್ತಿಯಲ್ಲಿ ಊಟಕ್ಕೆ ಕುಳಿತಿದ್ದಾನೆ.
22ಮನುಷ್ಯಕುಮಾರನು ದೇವರ ಯೋಜನೆಗನುಸಾರವಾಗಿ
ಮರಣ ಹೊಂದುವನು. ಆದರೆ ಮನುಷ್ಯಕುಮಾರನನ್ನು
ಕೊಲ್ಲುವುದಕ್ಕೆ ಒಪ್ಪಿಸಿಕೊಡುವ ವ್ಯಕ್ತಿಗೆ ಬಹಳ ಕೇಡಾಗುವುದು’’
ಎಂದು ಹೇಳಿದನು.
23ಆಗ ಅಪೊಸ್ತಲರು, ‘‘ನಮ್ಮಲ್ಲಿ ಯಾವನು ಇಂಥ ದುಷ್ಕೃತ್ಯ
ಮಾಡುವನು’’ ಎಂದು ಒಬ್ಬರನ್ನೊಬ್ಬರು ಕೇಳಿಕೊಂಡರು.

## ಸೇವಕರಂತಿರಿ

24ಬಳಿಕ ಅಪೊಸ್ತಲರು ತಮ್ಮಲ್ಲಿ ಯಾರು ಅತಿ ಶ್ರೇಷ್ಠರೆಂದು
ವಾದ ಮಾಡತೊಡಗಿದರು. 25ಆಗ ಯೇಸು ಅವರಿಗೆ, ‘‘ಈ
ಲೋಕದ ಅರಸರು ತಮ್ಮ ಜನರ ಮೇಲೆ ದೊರೆತನ
ಮಾಡುತ್ತಾರೆ. ಜನರ ಮೇಲೆ ಅಧಿಕಾರ ಹೊಂದಿರುವವರನ್ನು
ಧರ್ಮಿಷ್ಠರೆಂದು ಕರೆಯುತ್ತಾರೆ. 26ಆದರೆ ನೀವು ಹಾಗಾಗ
ಬಾರದು. ಅತ್ಯಂತ ದೊಡ್ಡ ವ್ಯಕ್ತಿಯು ಅತ್ಯಂತ ಚಿಕ್ಕ ವ್ಯಕ್ತಿಯಾಗ
ಬೇಕು. ನಾಯಕರು ಸೇವಕರಂತಿರಬೇಕು. 27ಶ್ರೇಷ್ಠನಾದವನು
ಯಾರು? ಊಟಕ್ಕೆ ಕುಳಿತವನೇ? ಅಥವಾ ಅವನಿಗೆ ಸೇವೆ
ಮಾಡುವವನೇ? ಊಟಕ್ಕೆ ಕುಳಿತಿರುವವನೇ ಶ್ರೇಷ್ಠನೆಂದು
ನೀವು ಭಾವಿಸುತ್ತೀರೊ? ಆದರೆ ನಾನು ನಿಮ್ಮಲ್ಲಿ ಸೇವಕ
ನಂತಿದ್ದೇನೆ!
28‘‘ನೀವು ನನ್ನ ಅನೇಕ ಕಷ್ಟಗಳಲ್ಲಿ ನನ್ನ ಸಂಗಡ ಇದ್ದವರು.
29ನನ್ನ ತಂದೆ ನನಗೆ ರಾಜ್ಯವನ್ನು ಕೊಟ್ಟಿದ್ದಾನೆ. ನನ್ನ ಸಂಗಡ
ಆಳುವುದಕ್ಕೆ ನಾನು ಸಹ ನಿಮಗೆ ಅಧಿಕಾರ ಕೊಡುತ್ತೇನೆ. 30ನನ್ನ
ರಾಜ್ಯದಲ್ಲಿ ನೀವು ನನ್ನ ಸಂಗಡ ಊಟಮಾಡುವಿರಿ ಮತ್ತು
ಕುಡಿಯುವಿರಿ. ನೀವು ಸಿಂಹಾಸನಗಳಲ್ಲಿ ಕುಳಿತುಕೊಂಡು
ಇಸ್ರೇಲಿನ ಹನ್ನೆರಡು ಕುಲಗಳಿಗೆ ನ್ಯಾಯತೀರಿಸುವಿರಿ.

## ನಿಮ್ಮ ನಂಬಿಕೆಯನ್ನು ಕಳೆದುಕೊಳ್ಳಬೇಡಿರಿ!

(ಮತ್ತಾಯ 26:31-35; ಮಾರ್ಕ 14:27-31; ಯೋಹಾನ 13:36-38)

31‘‘ಒಬ್ಬ ರೈತನು ತನ್ನ ಗೋಧಿಯನ್ನು ತೂರುವಂತೆ
ಸೈತಾನನು ನಿಮ್ಮನ್ನು ಶೋಧಿಸಲು ಕೇಳಿಕೊಂಡನು.
ಸೀಮೋನನೇ, ಸೀಮೋನನೇ (ಪೇತ್ರ) 32ನಿನ್ನ ನಂಬಿಕೆಯು
ಕುಂದಿಹೋಗಬಾರದೆಂದು ನಾನು ಪ್ರಾರ್ಥಿಸಿದೆನು! ನೀನು
ಪರಿವರ್ತನೆಗೊಂಡ ನಂತರ ನಿನ್ನ ಸಹೋದರರನ್ನು ಬಲ
ಪಡಿಸು’’ ಎಂದು ಹೇಳಿದನು.
33ಅದಕ್ಕೆ ಪೇತ್ರನು ಯೇಸುವಿಗೆ, ‘‘ಪ್ರಭುವೇ, ನಿನ್ನ ಸಂಗಡ
ಸೆರೆಮನೆಗೆ ಹೋಗುವುದಕ್ಕೂ ಸಾಯುವುದಕ್ಕೂ ನಾನು
ಸಿದ್ಧನಾಗಿದ್ದೇನೆ’’ ಎಂದು ಹೇಳಿದನು.
34ಅದಕ್ಕೆ ಯೇಸು, ‘‘ಪೇತ್ರನೇ, ನಾಳೆ ಬೆಳಿಗ್ಗೆ ಕೋಳಿ
ಕೂಗುವ ಮೊದಲು ನನ್ನನ್ನು ಅರಿಯನೆಂದು ನೀನು ಮೂರು
ಸಲ ಹೇಳುವೆ!’’ ಅಂದನು.

## ಕಷ್ಟವನ್ನು ಎದುರಿಸಲು ಸಿದ್ಧರಾಗಿರಿ

35ಬಳಿಕ ಯೇಸು ಅಪೊಸ್ತಲರಿಗೆ, ‘‘ಜನರಿಗೆ ಬೋಧಿಸು
ವುದಕ್ಕೆ ನಾನು ನಿಮ್ಮನ್ನು ಹಣವಿಲ್ಲದೆ, ಚೀಲವಿಲ್ಲದೆ, ಮತ್ತು
ಪಾದರಕ್ಷೆಗಳಿಲ್ಲದೆ ಕಳುಹಿಸಿದೆನು. ಆದರೆ ನಿಮಗೆ ಏನಾದರೂ
ಕೊರತೆ ಆಯಿತೇ?’’ ಎಂದು ಕೇಳಿದನು.
ಅಪೊಸ್ತಲರು, ‘‘ಇಲ್ಲ’’ ಅಂದರು.

36ಯೇಸು ಅವರಿಗೆ, ‘‘ಆದರೆ ಈಗ ನಿಮ್ಮಲ್ಲಿ ಹಣವಾಗಲಿ ಚೀಲವಾಗಲಿ ಇದ್ದರೆ ಅದನ್ನು ತೆಗೆದುಕೊಂಡು ಹೋಗಿರಿ. ನಿಮ್ಮಲ್ಲಿ ಖಡ್ಗವಿಲ್ಲದಿದ್ದರೆ, ನಿಮ್ಮ ಮೇಲಂಗಿಯನ್ನು ಮಾರಿ ಒಂದು ಖಡ್ಗವನ್ನು ಕೊಂಡುಕೊಳ್ಳಿರಿ.

> 37 ‘ಆತನು, ಅಪರಾಧಿಗಳಲ್ಲಿ ಒಬ್ಬನಂತೆ ಎಣಿಸಲ್ಪಟ್ಟನು’
>
> *ಯೆಶಾಯ 53:12*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ. ನನ್ನ ಬಗ್ಗೆ ಬರೆಯಲ್ಪಟ್ಟಿರುವ ಈ ಮಾತು ನೆರವೇರಬೇಕಾಗಿದೆ ಮತ್ತು ಈಗ ನೆರವೇರುತ್ತಿದೆ’’ ಎಂದು ಹೇಳಿದನು.

38ಶಿಷ್ಯರು, ‘‘ಪ್ರಭುವೇ, ಇಲ್ಲಿ ನೋಡು, ಎರಡು ಖಡ್ಗಗಳಿವೆ’’ ಎಂದು ಹೇಳಿದರು.

ಯೇಸು ‘‘ಅಷ್ಟು ಸಾಕು’’ ಅಂದನು.

### ಅಪೊಸ್ತಲರ ಪ್ರಾರ್ಥನೆಯ ಅಗತ್ಯತೆ

(ಮತ್ತಾಯ 26:36-46; ಮಾರ್ಕ 14:32-42)

39ಯೇಸು ಪಟ್ಟಣದಿಂದ (ಜೆರುಸಲೇಮ್) ಆಲಿವ್ ಮರಗಳ ಗುಡ್ಡಕ್ಕೆ ಹೋದನು. 40ಆತನ ಶಿಷ್ಯರೂ ಆತನೊಡನೆ ಹೋದರು. (ಯೇಸು ಆಗಾಗ್ಗೆ ಅಲ್ಲಿಗೆ ಹೋಗುತ್ತಿದ್ದನು.) ಯೇಸು ತನ್ನ ಶಿಷ್ಯರಿಗೆ ‘‘ನೀವು ಶೋಧನೆಗೆ ಒಳಗಾಗದಂತೆ ಪ್ರಾರ್ಥಿಸಿರಿ’’ ಎಂದು ಹೇಳಿದನು.

41ಬಳಿಕ ಯೇಸು ಅವರಿಂದ ಸುಮಾರು ನೂರೈವತ್ತು ಅಡಿ ದೂರ ಹೋದನು. ಆತನು ಮೊಣಕಾಲೂರಿ, 42‘‘ತಂದೆಯೇ, ನಿನಗೆ ಇಷ್ಟವಿದ್ದರೆ, ಈ ಶ್ರಮೆಯ ಪಾತ್ರೆಯನ್ನು ನನ್ನಿಂದ ತೊಲಗಿಸು. ಆದರೆ ನನ್ನ ಇಷ್ಟದಂತಾಗದೆ ನಿನ್ನ ಇಷ್ಟದಂತೆಯೇ ಮಾಡು’’ ಎಂದು ಪ್ರಾರ್ಥಿಸಿದನು. 43ಆಗ ಪರಲೋಕದಿಂದ ಒಬ್ಬ ದೇವದೂತನು ಕಾಣಿಸಿಕೊಂಡನು. ಯೇಸುವನ್ನು ಬಲಪಡಿಸುವುದಕ್ಕಾಗಿ ಈ ದೇವದೂತನನ್ನು ಕಳುಹಿಸಲಾಗಿತ್ತು. 44ಯೇಸುವಿಗೆ ತುಂಬಾ ವೇದನೆಯಿತ್ತು. ಆತನು ಪ್ರಾರ್ಥನೆಯಲ್ಲಿ ಕಷ್ಟಪಟ್ಟು ಹೋರಾಡಿದನು. ಆತನ ಮುಖದಲ್ಲಿ ಬೆವರು ರಕ್ತದೋಪಾದಿಯಲ್ಲಿ ತೊಟ್ಟಿಕ್ಕತೊಡಗಿತು. 45ಯೇಸು ಪ್ರಾರ್ಥಿಸಿದ ಮೇಲೆ ತನ್ನ ಶಿಷ್ಯರ ಬಳಿ ಹೋದನು. ಅವರು ನಿದ್ರೆ ಮಾಡುತ್ತಿದ್ದರು. (ಅವರು ದುಃಖದಿಂದ ಆಯಾಸಗೊಂಡಿದ್ದರು.) 46ಯೇಸು ಅವರಿಗೆ, ‘‘ನೀವು ಏಕೆ ನಿದ್ರಿಸುತ್ತಿದ್ದೀರಿ? ಎದ್ದೇಳಿರಿ! ಶೋಧನೆಗೆ ಒಳಗಾಗದಂತೆ ಪ್ರಾರ್ಥಿಸಿರಿ’’ ಎಂದು ಹೇಳಿದನು.

### ಯೇಸುವಿನ ಬಂಧನ

(ಮತ್ತಾಯ 26:47-56; ಮಾರ್ಕ 14:43-50; ಯೋಹಾನ18:3-11)

47ಯೇಸು ಮಾತಾಡುತ್ತಿದ್ದಾಗ, ಜನರ ಒಂದು ಗುಂಪು ಅಲ್ಲಿಗೆ ಬಂದಿತು. ಹನ್ನೆರಡು ಅಪೊಸ್ತಲರಲ್ಲಿ ಒಬ್ಬನು ಆ ಗುಂಪಿಗೆ ಮುಂದಾಳಾಗಿದ್ದನು. ಅವನೇ ಯೂದನು. ಅವನು ಯೇಸುವಿಗೆ ಮುದ್ದಿಡುವಷ್ಟು ಹತ್ತಿರ ಬಂದನು.

48ಯೇಸು ಅವನಿಗೆ, ‘‘ಯೂದನೇ, ಮುದ್ದಿಟ್ಟು ಮನುಷ್ಯಕುಮಾರನನ್ನು ಹಿಡಿದುಕೊಡುವಿಯೊ?’’ ಎಂದು ಕೇಳಿದನು. 49ಯೇಸುವಿನ ಶಿಷ್ಯರು ಸಹ ಅಲ್ಲಿ ನಿಂತಿದ್ದರು. ಅಲ್ಲಿ ನಡೆಯುತ್ತಿದ್ದುದನ್ನು ಅವರು ನೋಡುತ್ತಿದ್ದರು. ಶಿಷ್ಯರು ಯೇಸುವಿಗೆ, ‘‘ಪ್ರಭುವೇ, ನಾವು ನಮ್ಮ ಖಡ್ಗಗಳನ್ನು ಉಪಯೋಗಿಸೋಣವೇ?’’ ಎಂದು ಕೇಳಿದರು. 50ಶಿಷ್ಯರಲ್ಲಿ ಒಬ್ಬನು ತನ್ನ ಖಡ್ಗವನ್ನು ಬೀಸಿ ಮಹಾಯಾಜಕನ ಆಳಿನ ಬಲ ಕಿವಿಯನ್ನು ಕತ್ತರಿಸಿದನು.

51ಯೇಸು ಅವನಿಗೆ, ‘‘ನಿಲ್ಲಿಸು’’ ಎಂದು ಹೇಳಿ, ಆ ಸೇವಕನ ಕಿವಿಯನ್ನು ಮುಟ್ಟಿ ಸ್ವಸ್ಥಗೊಳಿಸಿದನು.

52ಯೇಸುವನ್ನು ಬಂಧಿಸಲು ಅಲ್ಲಿಗೆ ಮಹಾಯಾಜಕರು, ಹಿರಿಯ ಯೆಹೂದ್ಯನಾಯಕರು ಮತ್ತು ಯೆಹೂದ್ಯ ಸಿಪಾಯಿಗಳು ಬಂದಿದ್ದರು. ಯೇಸು ಅವರಿಗೆ, ‘‘ಖಡ್ಗಗಳನ್ನೂ ದೊಣ್ಣೆಗಳನ್ನೂ ಹಿಡಿದುಕೊಂಡು ಇಲ್ಲಿಗೆ ಬಂದದ್ದೇಕೆ? ನಾನು ಅಪರಾಧಿಯೆಂದು ನೀವು ಭಾವಿಸುತ್ತೀರೊ? 53ಪ್ರತಿದಿನ ನಿಮ್ಮ ಸಂಗಡ ದೇವಾಲಯದಲ್ಲಿದ್ದೆನು. ನೀವು ನನ್ನನ್ನು ಅಲ್ಲಿ ಏಕೆ ಬಂಧಿಸಲಿಲ್ಲ? ಆದರೆ ಇದು ನಿಮ್ಮ ಸಮಯ. ಇದು ಅಂಧಕಾರದ (ಪಾಪ) ದೊರೆತನ’’ ಎಂದು ಹೇಳಿದನು.

### ಪೇತ್ರನ ವಿಶ್ವಾಸದ್ರೋಹ

(ಮತ್ತಾಯ 26:57-58, 69-75; ಮಾರ್ಕ 14:53-54, 66-72; ಯೋಹಾನ 18:12-18, 25-27)

54ಅವರು ಯೇಸುವನ್ನು ಬಂಧಿಸಿ ಪ್ರಧಾನ ಯಾಜಕನ ಮನೆಯೊಳಗೆ ಕರೆದುಕೊಂಡು ಬಂದರು. ಪೇತ್ರನು ಅವರನ್ನು ಹಿಂಬಾಲಿಸಿದನು. ಆದರೆ ಅವನು ಯೇಸುವಿನ ಹತ್ತಿರ ಬರಲಿಲ್ಲ. 55ಸೈನಿಕರು ಅಂಗಳದ ಮಧ್ಯದಲ್ಲಿ ಬೆಂಕಿಯನ್ನು ಹೊತ್ತಿಸಿ ಒಟ್ಟಾಗಿ ಕುಳಿತುಕೊಂಡರು. ಪೇತ್ರನೂ ಅವರ ಜೊತೆ ಕುಳಿತುಕೊಂಡನು. 56ಪೇತ್ರನು ಅಲ್ಲಿ ಕುಳಿತಿರುವುದನ್ನು ಒಬ್ಬ ಸೇವಕಿ ನೋಡಿದಳು. ಬೆಂಕಿಯ ಬೆಳಕಿನಿಂದ ಆಕೆಯು ಪೇತ್ರನನ್ನು ಗುರುತಿಸಿದಳು. ಅವಳು ಪೇತ್ರನ ಮುಖವನ್ನೇ ಲಕ್ಷ್ಯವಿಟ್ಟು ನೋಡಿ, ‘‘ಈ ಮನುಷ್ಯನು ಆತನ (ಯೇಸು) ಸಂಗಡ ಇದ್ದವನು’’ ಅಂದಳು.

57ಆದರೆ ಪೇತ್ರನು ಅದು ನಿಜವಲ್ಲವೆಂದು ಹೇಳಿದನು. ಅವನು ಆಕೆಗೆ, ‘‘ಅಮ್ಮಾ, ಆತನು ನನಗೆ ಗೊತ್ತೇ ಇಲ್ಲ’’ ಅಂದನು. 58ಸ್ವಲ್ಪ ಸಮಯದ ನಂತರ ಇನ್ನೊಬ್ಬ ವ್ಯಕ್ತಿ ಪೇತ್ರನನ್ನು ನೋಡಿ, ‘‘ನೀನು ಯೇಸುವನ್ನು ಹಿಂಬಾಲಿಸುತ್ತಿದ್ದ ಜನರಲ್ಲಿ ಒಬ್ಬನಾಗಿದ್ದೆ!’’ ಎಂದು ಹೇಳಿದನು.

ಆದರೆ ಪೇತ್ರನು, ‘‘ನಾನು ಆತನ ಹಿಂಬಾಲಕರಲ್ಲಿ ಒಬ್ಬನಲ್ಲ’’ ಅಂದನು.

59ಸುಮಾರು ಒಂದು ತಾಸಿನ ನಂತರ ಇನ್ನೊಬ್ಬನು, ‘‘ಅದು ನಿಜ! ಈ ಮನುಷ್ಯನು ಆತನೊಡನೆ (ಯೇಸು) ಇದ್ದವನು. ಇವನು ಗಲಿಲೇಯದವನು!’’ ಎಂದು ದೃಢವಾಗಿ ಹೇಳಿದನು.

60ಆಗ ಪೇತ್ರನು, ‘‘ನೀನು ಏನು ಹೇಳುತ್ತಿದ್ದೀಯೋ ನನಗೆ ಗೊತ್ತಿಲ್ಲ’’ ಅಂದನು. ಪೇತ್ರನು ಇನ್ನೂ ಮಾತಾಡುತ್ತಿದ್ದಾಗ ಕೋಳಿ ಕೂಗಿತು. 61ಆಗ ಪ್ರಭು (ಯೇಸು) ಹಿಂತಿರುಗಿ ಪೇತ್ರನನ್ನು ದೃಷ್ಟಿಸಿ ನೋಡಿದನು. ‘‘ಮುಂಜಾನೆ ಕೋಳಿ ಕೂಗುವುದಕ್ಕಿಂತ ಮೊದಲು ನೀನು ನನ್ನನ್ನು ಅರಿಯೆನೆಂಬುದಾಗಿ ಮೂರು ಸಲ ಹೇಳುವೆ’’ ಎಂದು ಪ್ರಭುವು ಹೇಳಿದ ಮಾತನ್ನು ಪೇತ್ರನು ಆಗ ಜ್ಞಾಪಿಸಿಕೊಂಡನು. 62ಬಳಿಕ ಪೇತ್ರನು ಹೊರಗೆ ಹೋಗಿ ಬಹು ದುಃಖದಿಂದ ಅತ್ತನು.

### ಯೇಸುವಿಗೆ ಜನರು ಮಾಡಿದ ಅಪಹಾಸ್ಯ
(ಮತ್ತಾಯ 26:67-68; ಮಾರ್ಕ 14:65)

63-64 ಕೆಲವು ಜನರು ಯೇಸುವನ್ನು ಹಿಡಿದುಕೊಂಡಿದ್ದರು.
ಅವರು ಯೇಸುವಿನ ಮುಖಕ್ಕೆ ಮುಸುಕು ಹಾಕಿ, ಆತನನ್ನು
ಹೊಡೆದು, ''ನಿನ್ನನ್ನು ಹೊಡೆದವರ್ಯಾರು? ನಮಗೆ ಪ್ರವಾದನೆ
ಹೇಳು'' ಎಂದು ಗೇಲಿ ಮಾಡಿದರು. 65ಅವರು ಹಲವಾರು
ವಿಧದಲ್ಲಿ ಆತನನ್ನು ದೂಷಿಸಿ ನಿಂದಿಸಿದರು.

### ಯೆಹೂದ್ಯನಾಯಕರ ಮುಂದೆ ಯೇಸು
(ಮತ್ತಾಯ 26:59-66; ಮಾರ್ಕ 14:55-64; ಯೋಹಾನ18:19-24)

66ಮರುದಿನ ಮುಂಜಾನೆ ಹಿರಿಯ ಜನ ನಾಯಕರು,
ಮಹಾಯಾಜಕರು ಮತ್ತು ಧರ್ಮೋಪದೇಶಕರು ಒಟ್ಟಾಗಿ ಸೇರಿ
ಬಂದರು. ಅವರು ಯೇಸುವನ್ನು ನ್ಯಾಯಾಲಯಕ್ಕೆ ಕರೆ
ದೊಯ್ದು,
67''ನೀನು ಕ್ರಿಸ್ತನಾಗಿದ್ದರೆ ನಮಗೆ ಹೇಳು'' ಎಂದು
ಹೇಳಿದರು. ಯೇಸು ಅವರಿಗೆ, ''ನಾನು ಕ್ರಿಸ್ತನೆಂದು ಹೇಳಿದರೆ
ನೀವು ನನ್ನನ್ನು ನಂಬುವುದಿಲ್ಲ. 68ನಾನು ನಿಮ್ಮನ್ನು ಕೇಳಿದರೂ
ನೀವು ಉತ್ತರಕೊಡುವುದಿಲ್ಲ. 69ಆದರೆ ಇಂದಿನಿಂದ ಮನುಷ್ಯ
ಕುಮಾರನು ದೇವರ ಸಿಂಹಾಸನದ ಬಲಗಡೆಯಲ್ಲಿ ಆಸೀನ
ನಾಗಿರುವನು'' ಎಂದು ಹೇಳಿದನು.
70ಅವರೆಲ್ಲರೂ, ''ಹಾಗಾದರೆ ನೀನು ದೇವರ
ಕುಮಾರನೋ?'' ಎಂದು ಕೇಳಿದರು. ಯೇಸು ಅವರಿಗೆ,
''ನಾನು ಆತನೇ ಎಂದು ನೀವೇ ಹೇಳುತ್ತಿದ್ದೀರಿ'' ಎಂದನು.
71ಆಗ ಅವರು, ''ಇನ್ನೇನು ಸಾಕ್ಷಿಬೇಕು? ಆತನು ಹೀಗೆ
ಹೇಳುವುದನ್ನು ನಾವೇ ಕೇಳಿದೆವಲ್ಲಾ!'' ಅಂದರು.

### ರಾಜ್ಯಪಾಲ ಪಿಲಾತನಿಂದ ಯೇಸುವಿನ ವಿಚಾರಣೆ
(ಮತ್ತಾಯ 27:1-2;11-14; ಮಾರ್ಕ 15:1-5; ಯೋಹಾನ 18:28-38)

23 ಬಳಿಕ ಅಲ್ಲಿ ಸೇರಿಬಂದಿದ್ದವರೆಲ್ಲ ಎದ್ದು
ಯೇಸುವನ್ನು ಪಿಲಾತನ ಬಳಿಗೆ ಕರೆದುಕೊಂಡು
ಹೋದರು. 2ಅವರು ಯೇಸುವಿನ ಮೇಲೆ ದೋಷಾರೋಪಣೆ
ಮಾಡತೊಡಗಿದರು. ಅವರು ಪಿಲಾತನಿಗೆ, ''ಈ ಮನುಷ್ಯನು
ನಮ್ಮ ಜನರನ್ನು ತಪ್ಪು ದಾರಿಗೆ ನಡೆಸುವ ಸಂಗತಿಗಳನ್ನು
ಹೇಳುತ್ತಿದ್ದನು. ನಾವು ಸೀಸರನಿಗೆ ತೆರಿಗೆ ಕೊಡಬಾರದೆಂದೂ
ಇವನು ಹೇಳುತ್ತಿದ್ದನು. ಅಲ್ಲದೆ ಇವನು ತನ್ನನ್ನು ಕ್ರಿಸ್ತನೆಂಬ
ಅರಸನೆಂದು ಹೇಳಿಕೊಳ್ಳುತ್ತಾನೆ. ಆದ್ದರಿಂದ ನಾವು ಇವನನ್ನು
ಬಂಧಿಸಿದೆವು'' ಎಂದು ಹೇಳಿದರು.
3ಪಿಲಾತನು ಯೇಸುವನ್ನು, ''ನೀನು ಯೆಹೂದ್ಯರ
ಅರಸನೋ?'' ಎಂದು ಕೇಳಿದನು. ಯೇಸು, ''ನೀನೇ ಹೇಳಿ
ರುವೆ!'' ಎಂದು ಉತ್ತರಿಸಿದನು.
4ಪಿಲಾತನು ಮಹಾಯಾಜಕರಿಗೆ ಮತ್ತು ಜನರಿಗೆ, ''ನಾನು
ಇವನಲ್ಲಿ ಯಾವ ತಪ್ಪನ್ನೂ ಕಾಣಲಿಲ್ಲ''ಎಂದು ಹೇಳಿದನು.
5ಅದಕ್ಕೆ ಅವರು, ''ಇವನು ಜುದೇಯ ಪ್ರಾಂತ್ಯದಲ್ಲೆಲ್ಲಾ
ಉಪದೇಶಿಸಿ ಕ್ರಾಂತಿ ಎಬ್ಬಿಸಿದ್ದಾನೆ. ಗಲಿಲೇಯದಲ್ಲಿ
ಪ್ರಾರಂಭಿಸಿದ ಇವನು ಈಗ ಇಲ್ಲಿಗೂ ಬಂದಿದ್ದಾನೆ'' ಎಂದು
ಪದೇಪದೇ ಹೇಳಿದರು.

### ಹೆರೋದನ ಮುಂದೆ ಯೇಸು

6ಪಿಲಾತನು ಇದನ್ನು ಕೇಳಿ, ''ಇವನು ಗಲಿಲೇಯ
ದವನೋ?'' ಎಂದು ಕೇಳಿದನು. 7ಯೇಸು ಹೆರೋದನ
ಅಧಿಕಾರಕ್ಕೊಳಪಟ್ಟವನೆಂದು ಪಿಲಾತನಿಗೆ ತಿಳಿಯಿತು. ಆ
ಸಮಯದಲ್ಲಿ ಹೆರೋದನು ಜೆರುಸಲೇಮಿನಲ್ಲಿದ್ದನು. ಆದ್ದ
ರಿಂದ ಪಿಲಾತನು ಯೇಸುವನ್ನು ಅವನ ಬಳಿಗೆ ಕಳುಹಿಸಿದನು.
8ಹೆರೋದನು ಯೇಸುವನ್ನು ನೋಡಿದಾಗ ಬಹಳ ಸಂತೋಷ
ಪಟ್ಟನು. ಏಕೆಂದರೆ ಅವನು ಯೇಸುವಿನ ಬಗ್ಗೆ ಎಲ್ಲವನ್ನೂ
ಕೇಳಿದ್ದನು ಮತ್ತು ಬಹಳ ಕಾಲದಿಂದ ಆತನಿಂದ ಒಂದು
ಅದ್ಭುತಕಾರ್ಯವನ್ನು ನೋಡಬೇಕೆಂದಿದ್ದನು. 9ಹೆರೋದನು
ಯೇಸುವಿಗೆ ಅನೇಕ ಪ್ರಶ್ನೆಗಳನ್ನು ಕೇಳಿದನು. ಆದರೆ ಯೇಸು
ಒಂದಕ್ಕೂ ಉತ್ತರ ನೀಡಲಿಲ್ಲ. 10ಮಹಾಯಾಜಕರು ಮತ್ತು
ಧರ್ಮೋಪದೇಶಕರು ಅಲ್ಲಿ ನಿಂತುಕೊಂಡಿದ್ದರು. ಅವರು
ಯೇಸುವಿಗೆ ವಿರುದ್ಧವಾಗಿ ಕೂಗುತ್ತಿದ್ದರು. 11ಆಗ ಹೆರೋದನು
ಮತ್ತು ಅವನ ಸೈನಿಕರು ಯೇಸುವನ್ನು ನೋಡಿ ಗೇಲಿ ಮಾಡಿ
ದರು. ಅವರು ಯೇಸುವಿಗೆ ರಾಜನಂತೆ ಬಟ್ಟೆ ಉಡಿಸಿ ಹಾಸ್ಯ
ಮಾಡಿದರು. ಬಳಿಕ ಹೆರೋದನು ಯೇಸುವನ್ನು ಪಿಲಾತನ
ಬಳಿಗೆ ತಿರುಗಿ ಕಳುಹಿಸಿಕೊಟ್ಟನು. 12ಮೊದಲು ಪಿಲಾತನು
ಮತ್ತು ಹೆರೋದನು ವೈರಿಗಳಾಗಿದ್ದರು. ಆದರೆ ಅಂದು
ಹೆರೋದನು ಮತ್ತು ಪಿಲಾತನು ಮತ್ತೆ ಸ್ನೇಹಿತರಾದರು.

### ಯೇಸುವಿಗೆ ಮರಣದಂಡನೆ
(ಮತ್ತಾಯ 27:15-26; ಮಾರ್ಕ 15:6-15; ಯೋಹಾನ18:39-19:16)

13ಪಿಲಾತನು ಮಹಾಯಾಜಕರನ್ನೂ ಯೆಹೂದ್ಯ
ನಾಯಕರನ್ನೂ ಇತರ ಜನರನ್ನೂ ಒಟ್ಟಾಗಿ ಕರೆಸಿ, 14ಅವರಿಗೆ,
''ನೀವು ಈ ಮನುಷ್ಯನನ್ನು (ಯೇಸುವನ್ನು)ನನ್ನ ಬಳಿಗೆ ಕರೆದು
ಕೊಂಡು ಬಂದಿರಿ. ಇವನು ಜನರನ್ನು ತಪ್ಪುದಾರಿಗೆ ನಡೆಸು
ತ್ತಿದ್ದಾನೆ ಎಂದು ಹೇಳಿದಿರಿ. ಆದರೆ ನಾನು ನಿಮ್ಮೆಲ್ಲರ ಮುಂದೆ
ಇವನನ್ನು ವಿಚಾರಣೆ ಮಾಡಿದೆನು. ಆದರೆ ನಾನು ಇವನಲ್ಲಿ
ಯಾವ ತಪ್ಪನ್ನೂ ಕಾಣಲಿಲ್ಲ. ನಿಮ್ಮ ದೋಷಾರೋಪಣೆಗಳು
ಇವನಿಗೆ ಅನ್ವಯಿಸುವುದಿಲ್ಲ. 15ಇದಲ್ಲದೆ ಹೆರೋದನು ಸಹ
ಇವನಲ್ಲಿ ಯಾವ ತಪ್ಪನ್ನೂ ಕಾಣಲಿಲ್ಲ. ಹೆರೋದನು ಯೇಸು
ವನ್ನು ನಮ್ಮ ಬಳಿಗೆ ಮತ್ತೆ ಕಳುಹಿಸಿದನು. ನೋಡಿರಿ, ಯೇಸು
ಯಾವ ತಪ್ಪನ್ನೂ ಮಾಡಿಲ್ಲ. ಅವನಿಗೆ ಮರಣದಂಡನೆ ಆಗ
ಬಾರದು. 16ಆದ್ದರಿಂದ ನಾನು ಇವನನ್ನು ಸ್ವಲ್ಪ ಶಿಕ್ಷಿಸಿ ಬಿಟ್ಟು
ಬಿಡುತ್ತೇನೆ'' ಎಂದು ಹೇಳಿದನು. 17*
18ಆದರೆ ಜನರೆಲ್ಲರೂ, ''ಅವನನ್ನು ಕೊಲ್ಲಿಸು! ಬರಬ್ಬ
ನನ್ನು ಬಿಟ್ಟುಕೊಡು'' ಎಂದು ಕೂಗಿದರು. 19(ಬರಬ್ಬನು
ಪಟ್ಟಣದಲ್ಲಿ ದಂಗೆ ಎಬ್ಬಿಸಿದ್ದರಿಂದ ಸೆರೆಮನೆಯಲ್ಲಿದ್ದನು.
ಅವನು ಕೆಲವು ಜನರನ್ನು ಕೊಂದಿದ್ದನು.)
20ಪಿಲಾತನು ಯೇಸುವನ್ನು ಬಿಡಿಸಬೇಕೆಂದಿದ್ದನು. ಆದ್ದ
ರಿಂದ ಯೇಸುವನ್ನು ಬಿಟ್ಟುಬಿಡೋಣ ಎಂದು ಪಿಲಾತನು ಮತ್ತೆ

---

**ವಚನ 17** ಕೆಲವು ಗ್ರೀಕ್ ಪ್ರತಿಗಳಲ್ಲಿ 17ನೇ ವಚನವನ್ನು ಸೇರಿಸಲಾಗಿದೆ. ಅದರಲ್ಲಿ, ''ಪ್ರತಿವರ್ಷ ಪಸ್ಕಹಬ್ಬದ ಸಮಯದಲ್ಲಿ ಪಿಲಾತನು ಜನರಿಗೆ ಒಬ್ಬ ಕೈದಿಯನ್ನು ಬಿಡುಗಡೆ ಮಾಡಬೇಕಾಗಿತ್ತು'' ಎಂದು ಬರೆದದೆ.

ಅವರಿಗೆ ಹೇಳಿದನು. 21ಆದರೆ ಅವರು ಮತ್ತೆ, ‘‘ಅವನನ್ನು
ಕೊಲ್ಲಿಸು! ಅವನನ್ನು ಶಿಲುಬೆಗೇರಿಸು!’’ ಎಂದು ಕೂಗಿದರು.
22ಮೂರನೇ ಸಲ ಪಿಲಾತನು ಜನರಿಗೆ, ‘‘ಏಕೆ? ಆತನು
ಏನು ತಪ್ಪು ಮಾಡಿದನು? ಆತನು ತಪ್ಪಿತಸ್ಥನಲ್ಲ. ಆತನನ್ನು
ಕೊಲ್ಲಿಸುವುದಕ್ಕೆ ನನಗೆ ಯಾವ ಕಾರಣವೂ ಕಾಣಿಸುವುದಿಲ್ಲ.
ಆದ್ದರಿಂದ ಆತನನ್ನು ಸ್ವಲ್ಪ ಶಿಕ್ಷಿಸಿ ಬಿಟ್ಟುಬಿಡುತ್ತೇನೆ’’ ಎಂದು
ಹೇಳಿದನು.
23ಆದರೆ ಅವರು ಕೂಗಾಟವನ್ನು ಮುಂದುವರಿಸಿ
ಯೇಸುವನ್ನು ಶಿಲುಬೆಗೆ ಹಾಕಿ ಕೊಲ್ಲಿಸಬೇಕೆಂದು ಬಲವಂತ
ಪಡಿಸಿದರು. ಅವರ ಕೂಗಾಟ ಬಹಳ ಹೆಚ್ಚಾದದ್ದರಿಂದ,
24ಪಿಲಾತನು ಅವರ ಬಯಕೆಯನ್ನು ಈಡೇರಿಸಲು ನಿರ್ಧರಿಸಿ
ದನು. 25ಬರಬ್ಬನನ್ನು ಬಿಡುಗಡೆ ಮಾಡಬೇಕೆಂದು ಜನರು
ಕೇಳಿಕೊಂಡರು. ದಂಗೆ ಎಬ್ಬಿಸಿದ್ದರಿಂದ ಮತ್ತು ಕೊಲೆ
ಮಾಡಿದ್ದರಿಂದ ಬರಬ್ಬನು ಸೆರೆಮನೆಯಲ್ಲಿದ್ದನು. ಪಿಲಾತನು
ಬರಬ್ಬನನ್ನು ಬಿಡುಗಡೆ ಮಾಡಿ, ಯೇಸುವನ್ನು ಕೊಲ್ಲಿಸುವುದಕ್ಕೆ
ಜನರಿಗೆ ಒಪ್ಪಿಸಿದನು. ಜನರ ಬಯಕೆಯೂ ಇದೇ ಆಗಿತ್ತು.

## ಯೇಸುವನ್ನು ಶಿಲುಬೆಗೇರಿಸಿದರು

(ಮತ್ತಾಯ 27:32-44; ಮಾರ್ಕ 15:21-32; ಯೋಹಾನ 19:17-27)

26ಸೈನಿಕರು ಯೇಸುವನ್ನು ಕೊಲ್ಲಲು ಕರೆದೊಯ್ಯುವಾಗ
ಹೊಲದಿಂದ ಪಟ್ಟಣದೊಳಗೆ ಬರುತ್ತಿದ್ದ ಸಿಮೋನ ಎಂಬ
ವನನ್ನು ಕಂಡರು. ಸಿಮೋನನು ಸಿರೇನ್ ಪಟ್ಟಣದವನು.
ಯೇಸುವಿನ ಶಿಲುಬೆಯನ್ನು ಹೊತ್ತುಕೊಂಡು ಯೇಸುವಿನ
ಹಿಂದೆ ಬರುವಂತೆ ಸೈನಿಕರು ಸಿಮೋನನನ್ನು ಬಲವಂತ
ಮಾಡಿದರು.
27ಅನೇಕ ಅನೇಕ ಜನರು ಯೇಸುವನ್ನು ಹಿಂಬಾಲಿಸಿದರು.
ದೊಡ್ಡ ಗುಂಪಾಗಿ ಸೇರಿದ್ದ ಸ್ತ್ರೀಯರು ಯೇಸುವಿಗಾಗಿ ದುಃಖ
ಪಟ್ಟು ಎದೆ ಬಡಿದುಕೊಂಡು ಗೋಳಾಡುತ್ತಿದ್ದರು. 28ಆದರೆ
ಯೇಸು, ಆ ಸ್ತ್ರೀಯರಿಗೆ, ‘‘ಜೆರುಸಲೇಮಿನ ಸ್ತ್ರೀಯರೇ, ನನ
ಗಾಗಿ ಅಳಬೇಡಿರಿ. ನಿಮಗಾಗಿಯೂ ನಿಮ್ಮ ಮಕ್ಕಳಿಗಾಗಿಯೂ
ಅಳಿರಿ! 29‘ಬಂಜೆಯರೇ ಭಾಗ್ಯವಂತರು! ಹೆರದವಳೇ
ಹಾಲೂಡಿಸದವಳೇ ಭಾಗ್ಯವಂತಳು’ ಎಂದು ಜನರು ಹೇಳುವ
ಸಮಯ ಬರುತ್ತದೆ. 30ಆಗ ಜನರು ಬೆಟ್ಟಕ್ಕೆ, ‘ನಮ್ಮ ಮೇಲೆ
ಬೀಳು!’ ಎಂತಲೂ ಗುಡ್ಡಗಳಿಗೆ, ‘ನಮ್ಮನ್ನು ಮುಚ್ಚಿ
ಕೊಳ್ಳಿರಿ!’’ * ಎಂತಲೂ ಕೂಗಿಕೊಳ್ಳುವರು. 31ಜೀವನ ಸುಖ
ಕರವಾಗಿರುವಾಗ ಜನರು ಈ ರೀತಿ ವರ್ತಿಸಿದರೆ, ಜೀವನ ಕಷ್ಟಕರ
ವಾದಾಗ ಏನು ಮಾಡುವರು?’ * ಎಂದು ಹೇಳಿದನು.
32ಯೇಸುವಿನ ಸಂಗಡ ಇಬ್ಬರು ದುಷ್ಕರ್ಮಿಗಳನ್ನು ಕೊಲ್ಲ
ಬೇಕೆಂದು ಅವರು ನಿರ್ಧರಿಸಿದರು. 33ಯೇಸುವನ್ನು ಮತ್ತು
ಇಬ್ಬರು ದುಷ್ಕರ್ಮಿಗಳನ್ನು ಅವರು ‘‘ಕಪಾಲ’’ವೆಂಬ ಸ್ಥಳಕ್ಕೆ
ಕರೆದುಕೊಂಡು ಹೋದರು. ಅಲ್ಲಿ ಸೈನಿಕರು ಯೇಸುವನ್ನೂ ಆ
ದುಷ್ಕರ್ಮಿಗಳನ್ನೂ ಶಿಲುಬೆಗಳಿಗೆ ಜಡಿದರು. ಒಬ್ಬನನ್ನು
ಯೇಸುವಿನ ಬಲಗಡೆಯಲ್ಲಿಯೂ ಇನ್ನೊಬ್ಬನನ್ನು ಯೇಸುವಿನ
ಎಡಗಡೆಯಲ್ಲಿಯೂ ಹಾಕಿದರು. 34ಯೇಸು, ‘‘ತಂದೆಯೇ,
ಇವರನ್ನು ಕ್ಷಮಿಸು. ಇವರಿಗೆ ತಾವು ಮಾಡುತ್ತಿರುವುದು
ತಿಳಿದಿಲ್ಲ’’ ಎಂದು ಪ್ರಾರ್ಥಿಸಿದನು.
ಸೈನಿಕರು ಚೀಟಿಹಾಕಿ ಯೇಸುವಿನ ಬಟ್ಟೆಗಳು ಯಾರಿಗೆ
ಸೇರಬೇಕೆಂದು ತೀರ್ಮಾನಿಸಿದರು. 35ಜನರು ನೋಡುತ್ತಾ
ಅಲ್ಲಿ ನಿಂತಿದ್ದರು. ಯೆಹೂದ್ಯ ನಾಯಕರು ಯೇಸುವನ್ನು
ನೋಡಿ ಗೇಲಿಮಾಡಿದರು. ಅವರು, ‘‘ಇವನು ದೇವರಿಂದ
ಆರಿಸಲ್ಪಟ್ಟ ಕ್ರಿಸ್ತನಾಗಿದ್ದರೆ ತನ್ನನ್ನು ರಕ್ಷಿಸಿಕೊಳ್ಳಲಿ. ಇವನು
ಬೇರೆಯವರನ್ನು ರಕ್ಷಿಸಿದನಲ್ಲವೇ?’’ ಅಂದರು.
36ಸೈನಿಕರೂ ಯೇಸುವನ್ನು ಗೇಲಿಮಾಡಿದರು. ಅವರು
ಯೇಸುವಿನ ಬಳಿಗೆ ಬಂದು, ಸ್ವಲ್ಪ ಹುಳಿ ದ್ರಾಕ್ಷಾರಸವನ್ನು ನೀಡಿ,
37‘‘ನೀನು ಯೆಹೂದ್ಯರ ಅರಸನಾಗಿದ್ದರೆ, ನಿನ್ನನ್ನು ರಕ್ಷಿಸಿಕೊ’’
ಎಂದು ಹೇಳಿದರು. 38(ಶಿಲುಬೆಯ ಮೇಲ್ಭಾಗದಲ್ಲಿ ‘‘ಈತನು
ಯೆಹೂದ್ಯರ ಅರಸನು’’ ಎಂದು ಬರೆಯಲಾಗಿತ್ತು.)
39ದುಷ್ಕರ್ಮಿಗಳಲ್ಲೊಬ್ಬನು ಯೇಸುವನ್ನು ದೂಷಿಸಿ,
‘‘ನೀನು ಕ್ರಿಸ್ತನಲ್ಲವೊ? ಹಾಗಾದರೆ ನಿನ್ನನ್ನು ರಕ್ಷಿಸಿಕೊ!
ನಮ್ಮನ್ನೂ ರಕ್ಷಿಸು!’’ ಅಂದನು.
40ಆದರೆ ಇನ್ನೊಬ್ಬ ದುಷ್ಕರ್ಮಿಯು ಅವನನ್ನು ಗದರಿಸಿ,
‘‘ನೀನು ದೇವರಿಗೆ ಹೆದರಬೇಕು! ನಾವೆಲ್ಲರೂ ಬೇಗನೆ
ಸಾಯುವೆವು! 41ನೀನೂ ನಾನೂ ಅಪರಾಧಿಗಳಾಗಿದ್ದೇವೆ. ನಾವು
ತಪ್ಪು ಮಾಡಿದ್ದರಿಂದ ಶಿಕ್ಷಿಸಲ್ಪಡಬೇಕು. ಆದರೆ ಈ ಮನುಷ್ಯನು
(ಯೇಸು) ಯಾವ ತಪ್ಪನ್ನೂ ಮಾಡಲಿಲ್ಲ!’’ ಎಂದು ಹೇಳಿದನು.
42ಬಳಿಕ ಆ ದುಷ್ಕರ್ಮಿಯು ಆತನಿಗೆ, ‘‘ಯೇಸುವೇ, ನೀನು
ನಿನ್ನ ರಾಜ್ಯವನ್ನು ಸ್ಥಾಪಿಸುವಾಗ ನನ್ನನ್ನು ನೆನಸಿಕೊ!’’ ಎಂದು
ಹೇಳಿದನು. 43ಆಗ ಯೇಸು ಅವನಿಗೆ, ‘‘ಕೇಳು! ನಾನು ಸತ್ಯವನ್ನೇ
ಹೇಳುತ್ತೇನೆ ಈ ದಿನವೇ ನೀನು ನನ್ನ ಸಂಗಡ ಪರದೈಸಿ
ನಲ್ಲಿರುವಿ’’ ಎಂದು ಹೇಳಿದನು.

## ಯೇಸುವಿನ ಮರಣ

(ಮತ್ತಾಯ 27:45-56; ಮಾರ್ಕ 15:33-41; ಯೋಹಾನ 19:28-30)

44ಇಷ್ಟರಲ್ಲಿ ಹೆಚ್ಚು ಕಡಿಮೆ ಮಧ್ಯಾಹ್ನವಾಗಿತ್ತು. ಆದರೆ
ಇಡೀ ಪ್ರದೇಶವು ಮಧ್ಯಾಹ್ನ ಮೂರು ಗಂಟೆಯ ತನಕ
ಕತ್ತಲಾಯಿತು. 45ಸೂರ್ಯನ ಬೆಳಕೇ ಇರಲಿಲ್ಲ! ದೇವಾ
ಲಯದ ಪರದೆಯು ಎರಡು ಭಾಗವಾಗಿ ಹರಿದುಹೋಯಿತು.
46ಆಮೇಲೆ ಯೇಸು, ‘‘ತಂದೆಯೇ, ನನ್ನ ಆತ್ಮವನ್ನು ನಿನಗೆ
ಒಪ್ಪಿಸುತ್ತೇನೆ’’ * ಎಂದು ಮಹಾಧ್ವನಿಯಿಂದ ಕೂಗಿ ಪ್ರಾಣ
ಬಿಟ್ಟನು. 47ಅಲ್ಲಿದ್ದ ಶತಾಧಿಪತಿ ನಡೆದದ್ದನ್ನು ನೋಡಿ, ‘‘ಈ
ಮನುಷ್ಯನು ಒಳ್ಳೆಯವನೆಂದು ನನಗೆ ಗೊತ್ತಿತ್ತು’’ ಎಂದು ಹೇಳಿ
ದೇವರನ್ನು ಸ್ತುತಿಸಿದನು.
48ಈ ಸಂಗತಿಯನ್ನು ನೋಡುವುದಕ್ಕೆ ಅನೇಕ ಜನರು
ಪಟ್ಟಣದ ಹೊರಗೆ ಬಂದಿದ್ದರು. ಜನರು ಇದನ್ನು ನೋಡಿ,
ಬಹಳ ದುಃಖದಿಂದ ಹೊರಟುಹೋದರು. 49ಯೇಸುವಿನ
ಆತ್ಮೀಯ ಸ್ನೇಹಿತರೂ ಅಲ್ಲಿದ್ದರು. ಗಲಿಲೇಯದಿಂದ ಯೇಸು
ವನ್ನು ಹಿಂಬಾಲಿಸಿದ ಕೆಲವು ಸ್ತ್ರೀಯರೂ ಅಲ್ಲಿದ್ದರು.
ಅವರೆಲ್ಲರೂ ಶಿಲುಬೆಯಿಂದ ದೂರದಲ್ಲಿ ನಿಂತುಕೊಂಡು ಈ
ಸಂಗತಿಗಳನ್ನು ನೋಡಿದರು.

---

**ಆಗ... ಮುಚ್ಚಿಕೊಳ್ಳಿರಿ** ಹೋಶೇಯ 10:8

**ಜೀವನ ... ಮಾಡುವರು** ಅಕ್ಷರಶಃ ಅವರು ಇದನ್ನು ಹಸಿರಾದ ಮರದ ಮೇಲೆ ಮಾಡಿದರೆ, ಒಣಗಿದಲ್ಲಿ ಏನಾಗುವುದು.’’

**ತಂದೆಯೇ ... ಒಪ್ಪಿಸುತ್ತೇನೆ** ಕೀರ್ತನೆ 31:5

### ಅರಿಮಥಾಯದ ಯೋಸೇಫನು

(ಮತ್ತಾಯ 27:57-61; ಮಾರ್ಕ 15:42-47; ಯೋಹಾನ 19:38-42)

50-51 ಅರಿಮಥಾಯ ಎಂಬುದು ಯೆಹೂದ್ಯರ ಒಂದು
ಊರು. ಯೋಸೇಫನು ಇದರ ನಿವಾಸಿ. ಇವನು ಒಳ್ಳೆಯ
ಧಾರ್ಮಿಕ ವ್ಯಕ್ತಿಯಾಗಿದ್ದನು. ದೇವರ ರಾಜ್ಯದ ಆಗಮನವನ್ನು
ಇವನು ನಿರೀಕ್ಷಿಸಿದ್ದನು. ಯೋಸೇಫನು ಯೆಹೂದ್ಯರ ಹಿರಿ
ಸಭೆಯ ಸದಸ್ಯನಾಗಿದ್ದನು. ಆದರೆ ಬೇರೆ ಯೆಹೂದ್ಯ
ನಾಯಕರು ಯೇಸುವನ್ನು ಕೊಲ್ಲಲು ತೀರ್ಮಾನಿಸಿದಾಗ
ಇವನು ಅದಕ್ಕೆ ಒಪ್ಪಲಿಲ್ಲ. 52 ಯೇಸುವಿನ ದೇಹವನ್ನು ತನಗೆ
ಕೊಡಬೇಕೆಂದು ಯೋಸೇಫನು ಪಿಲಾತನನ್ನು ಕೇಳಿಕೊಂಡನು.
53 ಬಳಿಕ ಇವನು ಯೇಸುವಿನ ದೇಹವನ್ನು ಶಿಲುಬೆಯಿಂದ ಇಳಿಸಿ
ಬಟ್ಟೆಯಲ್ಲಿ ಸುತ್ತಿ, ಬಂಡೆಯಲ್ಲಿ ತೋಡಿದ್ದ ಸಮಾಧಿಯಲ್ಲಿ
ಇಟ್ಟನು. ಈ ಸಮಾಧಿಯಲ್ಲಿ ಬೇರೆ ಯಾರನ್ನೂ ಎಂದೂ
ಹೂಳಿರಲಿಲ್ಲ. 54 ಅದು ಸಿದ್ಧತೆಯ ದಿನದ* ಸಾಯಂಕಾಲ
ವಾಗಿತ್ತು. ಸೂರ್ಯನು ಮುಳುಗಿದಾಗ, ಸಬ್ಬತ್ ದಿನ ಪ್ರಾರಂಭ
ವಾಗಲಿಕ್ಕಿತ್ತು.

55 ಗಲಿಲೇಯದಿಂದ ಯೇಸುವಿನ ಸಂಗಡ ಬಂದಿದ್ದ
ಸ್ತ್ರೀಯರು ಯೋಸೇಫನನ್ನು ಹಿಂಬಾಲಿಸಿದರು. ಅವರು
ಸಮಾಧಿಯನ್ನೂ ಯೇಸುವಿನ ದೇಹವನ್ನು ಇಟ್ಟಿದ್ದ ಸ್ಥಳವನ್ನೂ
ನೋಡಿದರು. 56 ಬಳಿಕ ಆ ಸ್ತ್ರೀಯರು ಯೇಸುವಿನ ದೇಹಕ್ಕೆ
ಹಚ್ಚಲು ಪರಿಮಳ ದ್ರವ್ಯಗಳನ್ನು ಸಿದ್ಧಮಾಡುವುದಕ್ಕಾಗಿ
ಹೊರಟುಹೋದರು.

ಸಬ್ಬತ್ ದಿನದಲ್ಲಿ ಅವರು ವಿಶ್ರಮಿಸಿಕೊಂಡರು.
ಮೋಶೆಯ ಧರ್ಮಶಾಸ್ತ್ರದ ಪ್ರಕಾರ ಸಬ್ಬತ್ ದಿನದಂದು
ಜನರೆಲ್ಲರೂ ವಿಶ್ರಾಂತಿ ತೆಗೆದುಕೊಳ್ಳಬೇಕಿತ್ತು.

### ಯೇಸುವಿನ ಪುನರುತ್ಥಾನ

(ಮತ್ತಾಯ 28:1-10; ಮಾರ್ಕ 16:1-8; ಯೋಹಾನ 20:1-10)

24 ಭಾನುವಾರ ಮುಂಜಾನೆ ಇನ್ನೂ ಮೊಬ್ಬಿರುವಾಗ
ಯೇಸುವಿನ ದೇಹವನ್ನಿಟ್ಟ ಸಮಾಧಿಯ ಬಳಿಗೆ ಆ
ಸ್ತ್ರೀಯರು ತಾವು ಸಿದ್ಧಮಾಡಿದ ಪರಿಮಳ ದ್ರವ್ಯಗಳನ್ನು
ತೆಗೆದುಕೊಂಡು ಬಂದರು. 2 ಬಂಡೆ ಉರುಳಿಸಲ್ಪಟ್ಟಿರುವುದನ್ನು
ಕಂಡ ಅವರು ಒಳಗೆ ಹೋದರು. 3 ಆದರೆ ಪ್ರಭು ಯೇಸುವಿನ
ದೇಹವನ್ನು ಅವರು ಕಾಣಲಿಲ್ಲ. 4 ಸ್ತ್ರೀಯರಿಗೆ ಇದು
ಅರ್ಥವಾಗದೆ ಆಶ್ಚರ್ಯಪಡುತ್ತಿರಲು ಹೊಳೆಯುವ ಉಡುಪು
ಗಳನ್ನು ಧರಿಸಿಕೊಂಡಿದ್ದ ಇಬ್ಬರು (ದೇವದೂತರು) ಅವರ
ಬಳಿಯಲ್ಲಿ ನಿಂತರು. 5 ಆ ಸ್ತ್ರೀಯರು ಬಹಳವಾಗಿ ಹೆದರಿ ತಮ್ಮ
ಮುಖಗಳನ್ನು ನೆಲದ ಕಡೆಗೆ ಬಗ್ಗಿಸಿಕೊಂಡು ನಿಂತರು. ಆ
ಮನುಷ್ಯರು, ‘‘ಬದುಕಿರುವ ವ್ಯಕ್ತಿಯನ್ನು ಇಲ್ಲಿ ಹುಡುಕು
ವುದೇಕೆ? ಇದು ಸತ್ತ ಜನರನ್ನು ಇಡುವ ಸ್ಥಳ! 6 ಯೇಸು ಇಲ್ಲಿಲ್ಲ.
ಆತನು ಜೀವಂತವಾಗಿ ಎದ್ದಿದ್ದಾನೆ! ಆತನು ಗಲಿಲೇಯ
ದಲ್ಲಿದ್ದಾಗ ಹೇಳಿದ ವಿಷಯ ಜ್ಞಾಪಕವಿಲ್ಲವೋ? 7 ಮನುಷ್ಯ
ಕುಮಾರನು ಕೆಡುಕರ ವಶಕ್ಕೆ ಒಪ್ಪಿಸಲ್ಪಟ್ಟು, ಶಿಲುಬೆಯ ಮೇಲೆ
ಕೊಲ್ಲಲ್ಪಟ್ಟು, ಮೂರನೆಯ ದಿನದಲ್ಲಿ ಜೀವಂತವಾಗಿ ಎದ್ದು
ಬರುವನು ಎಂದು ಯೇಸು ತಿಳಿಸಲಿಲ್ಲವೇ!’’ ಎಂದು
ಹೇಳಿದರು. 8 ಆಗ ಆ ಸ್ತ್ರೀಯರು ಯೇಸುವಿನ ಮಾತುಗಳನ್ನು
ಜ್ಞಾಪಿಸಿಕೊಂಡರು. 9 ಆ ಸ್ತ್ರೀಯರು ಸಮಾಧಿಯಿಂದ ಹೊರಟು
ಹನ್ನೊಂದು ಮಂದಿ ಅಪೊಸ್ತಲರ ಮತ್ತು ಇತರ ಹಿಂಬಾಲಕರ
ಬಳಿಗೆ ಹೋದರು. ಆ ಸ್ತ್ರೀಯರು ಸಮಾಧಿಯ ಬಳಿ ನಡೆದ
ಸಂಗತಿಗಳನ್ನೆಲ್ಲಾ ಅವರಿಗೆ ಹೇಳಿದರು. 10 ಈ ಸ್ತ್ರೀಯರು
ಯಾರೆಂದರೆ, ಮಗ್ದಲದ ಮರಿಯಳು, ಯೋಹಾನಳು,
ಯಾಕೋಬನ ತಾಯಿಯಾದ ಮರಿಯಳು ಮತ್ತು ಬೇರೆ ಕೆಲವು
ಸ್ತ್ರೀಯರು. ನಡೆದ ಪ್ರತಿಯೊಂದನ್ನೂ ಈ ಸ್ತ್ರೀಯರು ಅಪೊಸ್ತಲ
ರಿಗೆ ತಿಳಿಸಿದರು. 11 ಆದರೆ ಅಪೊಸ್ತಲರು ನಂಬಲಿಲ್ಲ. ಅವರಿಗೆ
ಅದು ಹರಟೆಮಾತಾಗಿ ತೋರಿತು. 12 ಆದರೆ ಪೇತ್ರನು ಎದ್ದು
ಇದು ನಿಜವೇ ಎಂದು ನೋಡಲು ಸಮಾಧಿಗೆ ಓಡಿಹೋದನು.
ಅವನು ಒಳಗೆ ಹೋಗಿ ಬಗ್ಗಿ ನೋಡಿದಾಗ ಯೇಸುವಿನ ದೇಹಕ್ಕೆ
ಸುತ್ತಿದ್ದ ಬಟ್ಟೆಯನ್ನು ಮಾತ್ರ ನೋಡಿದನು. ಕೇವಲ ಬಟ್ಟೆಯು
ಅಲ್ಲಿ ಬಿದ್ದಿತ್ತು. ನಡೆದ ಈ ಸಂಗತಿಯ ಬಗ್ಗೆ ಪೇತ್ರನು ಆಶ್ಚರ್ಯ
ಪಡುತ್ತಾ ಹೊರಟುಹೋದನು.

### ಎಮ್ಮಾಹುವಿನ ದಾರಿಯಲ್ಲಿ

(ಮಾರ್ಕ 16:12-13)

13 ಅದೇ ದಿನ ಯೇಸುವಿನ ಶಿಷ್ಯರಲ್ಲಿ ಇಬ್ಬರು ಎಮ್ಮಾಹು
ಎಂಬ ಪಟ್ಟಣಕ್ಕೆ ಹೋಗುತ್ತಿದ್ದರು. ಅದು ಜೆರುಸಲೇಮಿನಿಂದ
ಏಳು ಮೈಲಿ ದೂರದಲ್ಲಿತ್ತು. 14 ನಡೆದ ಪ್ರತಿಯೊಂದು ಸಂಗತಿಯ
ಕುರಿತು ಅವರು ಮಾತಾಡುತ್ತಿದ್ದರು. 15 ಆಗ ಯೇಸು ತಾನೇ
ಅವರ ಹತ್ತಿರಕ್ಕೆ ಬಂದು, ಅವರ ಜೊತೆಯಲ್ಲಿ ಹೋದನು.
16 (ಆದರೆ ಅವರಿಗೆ ಆತನ ಗುರುತು ಸಿಕ್ಕಲಿಲ್ಲ.) 17 ಯೇಸು
ಅವರಿಗೆ, ‘‘ನೀವು ಯಾವ ಸಂಗತಿಗಳ ಬಗ್ಗೆ ಮಾತಾಡು
ತ್ತಿದ್ದೀರಿ?’’ ಎಂದು ಕೇಳಿದನು.

ಅವರಿಬ್ಬರು ಅಲ್ಲೇ ನಿಂತರು. ಅವರ ಮುಖಗಳು ಬಹಳ
ದುಃಖದಿಂದ ತುಂಬಿಹೋಗಿದ್ದವು. 18 ಅವರಲ್ಲಿ ಕ್ಲೆಯೋಫ
ನೆಂಬುವನು, ‘‘ಇತ್ತೀಚೆಗೆ ಜೆರುಸಲೇಮಿನಲ್ಲಿ ನಡೆದ ಸಂಗತಿ
ಯನ್ನು ತಿಳಿಯದಿರುವ ವ್ಯಕ್ತಿ ಎಂದರೆ ನೀನೊಬ್ಬನೇ ಇರ
ಬೇಕು’’ ಎಂದು ಉತ್ತರಿಸಿದನು.

19 ಯೇಸು ಅವರಿಗೆ, ‘‘ನೀವು ಯಾವುದರ ಬಗ್ಗೆ ಮಾತಾಡು
ತ್ತಿದ್ದೀರಿ?’’ ಎಂದು ಕೇಳಿದನು.

ಅವರು ಆತನಿಗೆ, ‘‘ನಜರೇತಿನ ಯೇಸುವಿನ ಬಗ್ಗೆ. ಆತನು
ದೇವರ ಮತ್ತು ಮನುಷ್ಯರ ದೃಷ್ಟಿಯಲ್ಲಿ ಮಹಾ ಪ್ರವಾದಿ
ಯಾಗಿದ್ದನು. ಆತನು ಅನೇಕ ಸಂಗತಿಗಳನ್ನು ಹೇಳಿದನು ಮತ್ತು
ಅದ್ಭುತಕಾರ್ಯಗಳನ್ನು ಮಾಡಿದನು. 20 ನಮ್ಮ ನಾಯಕರು
ಮತ್ತು ಮಹಾಯಾಜಕರು ಆತನಿಗೆ ಮರಣದಂಡನೆ ವಿಧಿಸಲು
ಒಪ್ಪಿಸಿಕೊಟ್ಟು ಶಿಲುಬೆಗೆ ಜಡಿಸಿದರು. 21 ಯೇಸುವೇ ಇಸ್ರೇಲ್
ಜನರನ್ನು (ಯೆಹೂದ್ಯರನ್ನು) ಬಿಡಿಸುತ್ತಾನೆಂದು ನಾವು
ನಿರೀಕ್ಷಿಸಿಕೊಂಡಿದ್ದೆವು. ಆದರೆ ಇದೆಲ್ಲಾ ನಡೆದುಹೋಯಿತು.
ಈಗ ಮತ್ತೊಂದು ಸಂಗತಿಯಾಗಿದೆ. ಈಗಾಗಲೇ ಆತನು ಸತ್ತು
ಮೂರು ದಿನಗಳಾದವು. 22 ಇಂದು ನಮ್ಮ ಕೆಲವು ಸ್ತ್ರೀಯರು
ಆಶ್ಚರ್ಯಕರವಾದ ಸಂಗತಿಗಳನ್ನು ಹೇಳಿದರು. ಮುಂಜಾನೆ
ಬೆಳಗಾಗುವಾಗ, ಯೇಸುವಿನ ದೇಹವನ್ನು ಇಟ್ಟಿದ್ದ ಸಮಾಧಿಯ
ಬಳಿಗೆ ಆ ಸ್ತ್ರೀಯರು ಹೋಗಿದ್ದರು. 23 ಆದರೆ ಅವರು ಆತನ
ದೇಹವನ್ನು ಅಲ್ಲಿ ಕಾಣಲಿಲ್ಲ. ಆ ಸ್ತ್ರೀಯರು ಹಿಂತಿರುಗಿ ಬಂದು
ತಮಗೆ ದೇವದೂತರಿಬ್ಬರ ದರ್ಶನವಾಯಿತೆಂದೂ ಯೇಸು

---

**ಸಿದ್ಧತೆಯ ದಿನ** ಶುಕ್ರವಾರ, ಸಬ್ಬತ್ ದಿನದ ಹಿಂದಿನ ದಿನ.

ಬದುಕಿದ್ದಾನೆಂದೂ ತಮಗೆ ಇದನ್ನು ದೇವದೂತರೇ
ತಿಳಿಸಿದರೆಂದೂ ನಮಗೆ ಹೇಳಿದರು. 23ಆದ್ದರಿಂದ ನಮ್ಮ
ಗುಂಪಿನಲ್ಲಿದ್ದ ಕೆಲವರು ಸಹ ಸಮಾಧಿಯ ಬಳಿಗೆ ಹೋದರು.
ಸ್ತ್ರೀಯರು ಹೇಳಿದ ಹಾಗೆಯೇ ಸಮಾಧಿಯು ಬರಿದಾಗಿತ್ತು.
ನಾವು ಸುತ್ತಮುತ್ತ ನೋಡಿದೆವು. ಆದರೆ ನಮ್ಮಲ್ಲಿ ಯಾರಿಗೂ
ಆತನು (ಯೇಸು) ಕಾಣಲಿಲ್ಲ'' ಎಂದು ಹೇಳಿದರು.

25ಆಗ ಯೇಸು ಅವರಿಗೆ, ''ನೀವು ಬುದ್ಧಿಹೀನರು ಮತ್ತು
ಸತ್ಯವನ್ನು ಗ್ರಹಿಸುವುದರಲ್ಲಿ ಮಂದಗತಿಗಳು! ಪ್ರವಾದಿಗಳು
ಹೇಳಿದ ಪ್ರತಿಯೊಂದನ್ನೂ ನೀವು ನಂಬಬೇಕು.26ಕ್ರಿಸ್ತನು ತನ್ನ
ಮಹಿಮೆಯನ್ನು ಪ್ರವೇಶಿಸುವ ಮೊದಲು ಇಂಥ ಶ್ರಮೆಗಳನ್ನು
ಅನುಭವಿಸಬೇಕು ಎಂದು ಪ್ರವಾದಿಗಳು ಹೇಳಿದ್ದಾರೆ''
ಅಂದನು. 27ಬಳಿಕ ಯೇಸು ತನ್ನ ಬಗ್ಗೆ ಪವಿತ್ರ ಗ್ರಂಥದಲ್ಲಿ
ಬರೆದಿರುವ ಪ್ರತಿಯೊಂದನ್ನೂ ವಿವರಿಸತೊಡಗಿದನು.
ಯೇಸುವು ಮೋಶೆಯ ಗ್ರಂಥಗಳಿಂದ ಪ್ರಾರಂಭಿಸಿ ಪ್ರವಾದಿ
ಗಳು ತನ್ನ ಬಗ್ಗೆ ಹೇಳಿದ ವಿಷಯಗಳ ಕುರಿತು ವಿವರಿಸಿದನು.

28ಅವರು ಎಮ್ಮಾಹು ಊರಿನ ಹತ್ತಿರಕ್ಕೆ ಬಂದಾಗ ಆತನು
ತಾನು ಅಲ್ಲಿ ಇಳಿದುಕೊಳ್ಳದವನಂತೆ ನಟಿಸಿದನು. 29ಆದರೆ
ಅವರು ಆತನಿಗೆ ''ಈಗ ಹೊತ್ತಾಯಿತು, ರಾತ್ರಿಯಾಗುತ್ತಾ
ಬಂದಿದೆ. ನಮ್ಮೊಂದಿಗೆ ಇರು'' ಎಂದು ಬೇಡಿಕೊಂಡರು. ಆದ್ದ
ರಿಂದ ಆತನು ಅವರೊಂದಿಗಿರಲು ಊರೊಳಗೆ ಹೋದನು.

30ಯೇಸು ಅವರ ಸಂಗಡ ಕುಳಿತುಕೊಂಡು ಸ್ವಲ್ಪ
ರೊಟ್ಟಿಯನ್ನು ತೆಗೆದುಕೊಂಡನು. ಆತನು ಆಹಾರಕ್ಕಾಗಿ
ದೇವರಿಗೆ ಸ್ತೋತ್ರಮಾಡಿ ಅದನ್ನು ಮುರಿದು ಅವರಿಗೆ
ಕೊಟ್ಟನು.

31ಆಗ ಅವರು ಯೇಸುವನ್ನು ಗುರುತಿಸಿದರು. ಆದರೆ
ಆತನೇ ಯೇಸುವೆಂದು ಅವರು ತಿಳಿದಾಕ್ಷಣವೇ ಆತನು ಅವರ
ಕಣ್ಣಿಗೆ ಮಾಯವಾದನು. 32ಅವರಿಬ್ಬರು, ''ಯೇಸು ದಾರಿ
ಯಲ್ಲಿ ನಮ್ಮ ಸಂಗಡ ಮಾತಾಡಿದಾಗ ನಮ್ಮಲ್ಲಿ ಬೆಂಕಿ ಉರಿ
ದಂತಾಯಿತಲ್ಲವೇ? ಪವಿತ್ರ ಗ್ರಂಥದ ನಿಜ ಅರ್ಥವನ್ನು ಆತನು
ವಿವರಿಸಿದಾಗ, ಬಹಳ ರೋಮಾಂಚಕಾರಿಯಾಗಿರಲಿಲ್ಲವೇ?''
ಎಂದು ಮಾತಾಡಿಕೊಂಡರು.

33ಆ ಕೂಡಲೇ ಅವರಿಬ್ಬರು ಎದ್ದು ಜೆರುಸಲೇಮಿಗೆ ಹಿಂತಿ
ರುಗಿ ಹೋದರು. ಜೆರುಸಲೇಮಿನಲ್ಲಿ ಯೇಸುವಿನ ಶಿಷ್ಯರು
ಒಟ್ಟಾಗಿ ಸೇರಿಬಂದಿದ್ದರು. ಹನ್ನೊಂದು ಮಂದಿ ಅಪೊಸ್ತಲರು
ಮತ್ತು ಅವರ ಸಂಗಡ ಇದ್ದ ಆ ಜನರು, 34''ಪ್ರಭುವು (ಯೇಸು)
ಸತ್ತವರೊಳಗಿಂದ ನಿಜವಾಗಿ ಎದ್ದಿದ್ದಾನೆ! ಆತನು ಸೀಮೋನನಿಗೆ
(ಪೇತ್ರ) ಕಾಣಿಸಿಕೊಂಡನು'' ಎಂದು ಹೇಳಿದರು. 35ಆಗ ಆ
ಇಬ್ಬರು ದಾರಿಯಲ್ಲಿ ನಡೆದ ಸಂಗತಿಗಳನ್ನು ತಿಳಿಸಿದರು. ಆತನು
ರೊಟ್ಟಿ ಮುರಿದಾಗ ತಾವು ಆತನನ್ನು ಗುರುತಿಸಿದ್ದಾಗಿ ಅವರು
ಹೇಳಿದರು.

### ಯೇಸು ತನ್ನ ಶಿಷ್ಯರಿಗೆ ಕಾಣಿಸಿಕೊಂಡನು

(ಮತ್ತಾಯ 28:16-20; ಮಾರ್ಕ 16:14-18; ಯೋಹಾನ 20:19-23;
ಅಪೊ. ಕೃತ್ಯ. 1:6-8)

36ಅವರಿಬ್ಬರು ಈ ಸಂಗತಿಗಳನ್ನು ಹೇಳುತ್ತಿದ್ದಾಗ,
ಯೇಸುವು ಶಿಷ್ಯರ ಗುಂಪಿನ ಮಧ್ಯದಲ್ಲಿ ನಿಂತುಕೊಂಡು
ಅವರಿಗೆ, ''ನಿಮಗೆ ಶಾಂತಿಯಾಗಲಿ'' ಅಂದನು.

37ಆಗ ಶಿಷ್ಯರು ಬೆರಗಾದರು. ಅವರಿಗೆ ಭಯವಾಯಿತು.
ಅದು ಭೂತವೇ ಇರಬೇಕೆಂದು ಅವರ ಭಾವಿಸಿದರು. 38ಆದರೆ
ಯೇಸು, ''ನೀವು ಏಕೆ ಗಲಿಬಿಲಿಗೊಂಡಿದ್ದೀರಿ? ನೀವು ಕಣ್ಣಾರೆ
ಕಂಡರೂ ಏಕೆ ಸಂಶಯಪಡುತ್ತೀರಿ? 39ನನ್ನ ಕೈಗಳನ್ನು ಮತ್ತು
ಪಾದಗಳನ್ನು ನೋಡಿರಿ. ನಾನೇ ಅಲ್ಲವೇ! ನನ್ನನ್ನು ಮುಟ್ಟಿರಿ.
ನನ್ನ ಈ ಜೀವಂತ ದೇಹವನ್ನು ನೀವೇ ನೋಡಿರಿ. ಭೂತಕ್ಕೆ ಈ
ರೀತಿಯ ದೇಹವಿರುವುದಿಲ್ಲ'' ಅಂದನು.

40ಯೇಸು ಅವರಿಗೆ ಇದನ್ನು ಹೇಳಿದ ನಂತರ, ತನ್ನ ಕೈಗಳಲ್ಲಿ
ಮತ್ತು ಪಾದಗಳಲ್ಲಿರುವ ಗಾಯದ ಗುರುತುಗಳನ್ನು ತೋರಿ
ಸಿದನು. 41ಶಿಷ್ಯರು ಅತ್ಯಾಶ್ಚರ್ಯಗೊಂಡರು ಮತ್ತು ಯೇಸು
ವನ್ನು ಜೀವಂತವಾಗಿ ಕಂಡು ಅತ್ಯಂತ ಸಂತೋಷಪಟ್ಟರು. ಆದರೆ
ಅವರಿಗಿನ್ನೂ ನಂಬಲಾಗಲಿಲ್ಲ. ಯೇಸು ಅವರಿಗೆ, ''ನಿಮ್ಮಲ್ಲಿ
ಆಹಾರವೇನಾದರೂ ಇದೆಯೊ?'' ಎಂದು ಕೇಳಿದನು.
42ಅವರು ಸುಟ್ಟ ಮೀನಿನ ತುಂಡನ್ನು ಕೊಟ್ಟರು. 43ಶಿಷ್ಯರ
ಕಣ್ಣೆದುರಿನಲ್ಲಿಯೇ, ಯೇಸು ಆ ಮೀನನ್ನು ತೆಗೆದುಕೊಂಡು
ತಿಂದನು.

44ಯೇಸು ಅವರಿಗೆ, ''ನಾನು ಮೊದಲು ನಿಮ್ಮ ಸಂಗಡ
ಇದ್ದುದನ್ನು ಜ್ಞಾಪಕಮಾಡಿಕೊಳ್ಳಿರಿ. ನನ್ನ ವಿಷಯವಾಗಿ
ಮೋಶೆಯ ಧರ್ಮಶಾಸ್ತ್ರದಲ್ಲಿ ಪ್ರವಾದಿಗಳ ಗ್ರಂಥಗಳಲ್ಲಿ,
ಕೀರ್ತನೆಗಳಲ್ಲಿ ಬರೆದಿರುವ ಪ್ರತಿಯೊಂದು ಸಂಗತಿಯೂ
ನೆರವೇರಬೇಕಾಗಿದೆ ಎಂದು ನಾನು ಹೇಳಿದೆನು'' ಅಂದನು.

45ಬಳಿಕ ಯೇಸು ಪವಿತ್ರ ಗ್ರಂಥವನ್ನು ತನ್ನ ಶಿಷ್ಯರಿಗೆ
ವಿವರಿಸಿದನು. ತನ್ನ ಬಗ್ಗೆ ಬರೆದಿರುವ ಸಂಗತಿಗಳನ್ನು
ಅರ್ಥಮಾಡಿಕೊಳ್ಳಲು ಅವರಿಗೆ ನೆರವು ನೀಡಿದನು. 46ಬಳಿಕ
ಯೇಸು ಅವರಿಗೆ, ''ಕ್ರಿಸ್ತನು ಕೊಲ್ಲಲ್ಪಟ್ಟು ಮೂರನೆಯ
ದಿನದಲ್ಲಿ ಸತ್ತವರೊಳಗಿಂದ ಎದ್ದುಬರುವನು' ಎಂದು
ಬರೆಯಲ್ಪಟ್ಟಿದೆ. 47-48ಈ ಸಂಗತಿಗಳು ನೆರವೇರುವುದನ್ನು
ನೀವು ನೋಡಿದಿರಿ. ನೀವೇ ಇದಕ್ಕೆ ಸಾಕ್ಷಿಗಳು. ನೀವು ಜನರ
ಬಳಿಗೆ ಹೋಗಿ, ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ
ಕಡೆಗೆ ತಿರುಗಿಕೊಳ್ಳುವವರಿಗೆ ಪಾಪಕ್ಷಮೆಯಾಗುತ್ತದೆ ಎಂದು
ತಿಳಿಸಿರಿ. ನೀವು ಈ ಸುವಾರ್ತೆಯನ್ನು ಜೆರುಸಲೇಮಿನಲ್ಲಿ
ಪ್ರಾರಂಭಿಸಿ ಲೋಕದ ಜನರೆಲ್ಲರಿಗೂ ನನ್ನ ಹೆಸರಿನಲ್ಲಿ
ತಿಳಿಸಬೇಕು. 49ಕೇಳಿರಿ! ನನ್ನ ತಂದೆ ನಿಮಗೆ ವಾಗ್ದಾನ
ಮಾಡಿದ್ದನ್ನು ನಾನು ನಿಮಗೆ ಕಳುಹಿಸಿಕೊಡುತ್ತೇನೆ. ಆದರೆ
ನೀವು ಪರಲೋಕದಿಂದ ಆ ಶಕ್ತಿಯನ್ನು ಪಡೆಯುವ ತನಕ
ಜೆರುಸಲೇಮಿನಲ್ಲೇ ಕಾದುಕೊಂಡಿರಿ'' ಅಂದನು.

### ಯೇಸುವಿನ ಪರಲೋಕಾರೋಹಣ

(ಮಾರ್ಕ 16:19-20; ಅಪೊ. ಕೃತ್ಯ 1:9-11)

50ಯೇಸು ತನ್ನ ಶಿಷ್ಯರನ್ನು ಜೆರುಸಲೇಮಿನ ಹೊರಗೆ
ಬೆಥಾನಿಯದ ಸಮೀಪಕ್ಕೆ ಕರೆದುಕೊಂಡು ಹೋದನು. ಯೇಸು
ತನ್ನ ಕೈಗಳನ್ನು ಎತ್ತಿ ಶಿಷ್ಯರನ್ನು ಆಶೀರ್ವದಿಸಿದನು. 51ಯೇಸು
ಅವರನ್ನು ಆಶೀರ್ವದಿಸುತ್ತಿದ್ದಾಗ ಅವರಿಂದ ಬೇರ್ಪಟ್ಟು ಪರ
ಲೋಕಕ್ಕೆ ಎತ್ತಲ್ಪಟ್ಟನು. 52ಶಿಷ್ಯರು ಅಲ್ಲಿ ಆತನನ್ನು ಆರಾಧಿ
ಸಿದರು. ಬಳಿಕ ಅವರು ಪಟ್ಟಣಕ್ಕೆ ಹಿಂತಿರುಗಿ ಹೋದರು.
ಅವರು ಬಹಳ ಸಂತೋಷಗೊಂಡಿದ್ದರು. 53ಅವರು ಯಾವಾ
ಗಲೂ ದೇವಾಲಯದಲ್ಲಿ ದೇವರನ್ನು ಸ್ತುತಿಸುತ್ತಿದ್ದರು.

# ಯೋಹಾನನ ಸುವಾರ್ತೆ

### ಜಗತ್ತಿಗೆ ಕ್ರಿಸ್ತನ ಆಗಮನ

1 ಜಗತ್ತು ಸೃಷ್ಟಿಯಾಗುವುದಕ್ಕಿಂತ ಮೊದಲೇ ವಾಕ್ಯ*
ಎಂಬಾತನಿದ್ದನು. ಆ ವಾಕ್ಯ ಎಂಬಾತನು ದೇವರೊಂದಿಗೆ
ಇದ್ದನು. ಆ ವಾಕ್ಯ ಎಂಬಾತನೇ ಸ್ವತಃ ದೇವರಾಗಿದ್ದನು.
2 ಆರಂಭದಲ್ಲಿ ಆತನು ದೇವರೊಂದಿಗೆ ಇದ್ದನು. 3 ಎಲ್ಲಾ
ವಸ್ತುಗಳು ಆತನ ಮೂಲಕ ನಿರ್ಮಾಣಗೊಂಡವು. ಆತನಿಲ್ಲದೆ
ಯಾವುದೂ ನಿರ್ಮಿತವಾಗಲಿಲ್ಲ. 4 ಆತನಲ್ಲಿ ಜೀವವಿತ್ತು. ಆ
ಜೀವವು ಮನುಷ್ಯರಿಗೆ ಬೆಳಕಾಗಿತ್ತು. 5 ಬೆಳಕು ಕತ್ತಲೆಯಲ್ಲಿ
ಪ್ರಕಾಶಿಸುತ್ತದೆ. ಆದರೆ ಕತ್ತಲೆಯು ಬೆಳಕನ್ನು ಮುಸುಕಲಿಲ್ಲ.

6 ಯೋಹಾನ* ಎಂಬ ಒಬ್ಬ ಮನುಷ್ಯನನ್ನು ದೇವರು
ಕಳುಹಿಸಿದನು. 7 ಯೋಹಾನನು ಬೆಳಕಿನ (ಕ್ರಿಸ್ತನ) ಬಗ್ಗೆ
ಜನರಿಗೆ ತಿಳಿಸುವುದಕ್ಕಾಗಿ ಬಂದನು. ತನ್ನ ಮೂಲಕ ಎಲ್ಲಾ
ಜನರು ಬೆಳಕಿನ ಬಗ್ಗೆ ಕೇಳಿ ನಂಬಿಕೊಳ್ಳಲೆಂದು ಅವನು
ಬಂದನು. 8 ಯೋಹಾನನೇ ಆ ಬೆಳಕಾಗಿರಲಿಲ್ಲ. ಆದರೆ
ಯೋಹಾನನು ಬೆಳಕಿನ ಬಗ್ಗೆ ಜನರಿಗೆ ಸಾಕ್ಷಿ ನೀಡಲು ಬಂದನು.
9 ನಿಜವಾದ ಬೆಳಕು ಈ ಲೋಕಕ್ಕೆ ಆಗಮಿಸಲಿತ್ತು. ಈ ನಿಜವಾದ
ಬೆಳಕೇ ಎಲ್ಲಾ ಜನರಿಗೆ ಬೆಳಕನ್ನು ಕೊಡುತ್ತದೆ.

10 ವಾಕ್ಯ ಎಂಬಾತನು ಆಗಲೇ ಈ ಲೋಕದಲ್ಲಿದ್ದನು. ಈ
ಲೋಕವು ವಾಕ್ಯ ಎಂಬಾತನ ಮೂಲಕ ನಿರ್ಮಾಣಗೊಂಡಿತು.
ಆದರೆ ಈ ಲೋಕದವರು ಆತನನ್ನು ತಿಳಿದಿರಲಿಲ್ಲ. 11 ಆತನು
ತನ್ನ ಸ್ವಾಸ್ಥ್ಯಕ್ಕೆ ಬಂದನು. ಆದರೆ ಆತನ ಸ್ವಂತ ಜನರು ಆತನನ್ನು
ಸ್ವೀಕರಿಸಿಕೊಳ್ಳಲಿಲ್ಲ. 12 ಯಾರ್ಯಾರು ಆತನನ್ನು ಸ್ವೀಕರಿಸಿ
ಕೊಂಡರೊ ಅಂದರೆ ಆತನಲ್ಲಿ ನಂಬಿಕೆ ಇಟ್ಟರೊ ಅವರಿಗೆ
ಆತನು ದೇವರ ಮಕ್ಕಳಾಗುವ ಅಧಿಕಾರಕೊಟ್ಟನು. 13 ಇವರು
ರಕ್ತದಿಂದಾಗಲಿ ಕಾಮದಿಂದಾಗಲಿ ಪುರುಷನ ಸಂಕಲ್ಪ
ದಿಂದಾಗಲಿ ಹುಟ್ಟಿದವರಲ್ಲ. ಇವರು ದೇವರಿಂದಲೇ
ಹುಟ್ಟಿದವರು.

14 ವಾಕ್ಯ ಎಂಬಾತನು ಮನುಷ್ಯನಾಗಿ ನಮ್ಮೊಂದಿಗೆ
ವಾಸಿಸಿದನು. ನಾವು ಆತನ ಮಹಿಮೆಯನ್ನು ನೋಡಿದೆವು. ಆ
ಮಹಿಮೆಯು ತಂದೆಯ ಒಬ್ಬನೇ ಮಗನಿಗಿರುವ ಮಹಿಮೆ
ಯಾಗಿತ್ತು. ಆತನು ಕೃಪೆಯಿಂದಲೂ ಸತ್ಯದಿಂದಲೂ ತುಂಬಿದವ
ನಾಗಿದ್ದನು. 15 ಯೋಹಾನನು ಆತನ ಬಗ್ಗೆ ಜನರಿಗೆ ತಿಳಿಸುತ್ತಾ,
‘‘‘ನನ್ನ ನಂತರ ಬರುವ ಒಬ್ಬನು ನನಗಿಂತಲೂ ಶ್ರೇಷ್ಠನಾಗಿ
ದ್ದಾನೆ. ಆತನು ನನಗಿಂತ ಮೊದಲೇ ಜೀವಿಸುತ್ತಿದ್ದನು’ ಎಂದು
ನಾನು ಹೇಳಿದಾಗ ಈತನ ಬಗ್ಗೆಯೇ ಮಾತಾಡುತ್ತಿದ್ದೆನು’’
ಎಂದು ಗಟ್ಟಿಯಾಗಿ ಕೂಗಿ ಹೇಳಿದನು.

16 ವಾಕ್ಯ ಎಂಬಾತನು ಕೃಪೆಯಿಂದಲೂ ಸತ್ಯದಿಂದಲೂ
ತುಂಬಿದವನಾಗಿದ್ದನು. ಆತನಿಂದಲೇ ನಾವೆಲ್ಲರೂ ಕೃಪೆಯ
ಮೇಲೆ ಕೃಪೆಯನ್ನು ಹೊಂದಿದೆವು. 17 ಧರ್ಮಶಾಸ್ತ್ರವು
ಮೋಶೆಯ ಮೂಲಕ ಕೊಡಲ್ಪಟ್ಟಿತು. ಆದರೆ ಕೃಪೆಯೂ
ಸತ್ಯವೂ ಯೇಸುಕ್ರಿಸ್ತನ ಮೂಲಕ ಬಂದವು. 18 ದೇವರನ್ನು
ಯಾರೂ ಎಂದೂ ಕಂಡಿಲ್ಲ. ಆದರೆ ಒಬ್ಬನೇ ಮಗನು
(ಯೇಸು) ದೇವರಾಗಿದ್ದಾನೆ. ಆತನು ತಂದೆಯ (ದೇವರ)
ಎದೆಯಲ್ಲಿದ್ದಾನೆ. ಆತನೇ ತಂದೆಯನ್ನು ತಿಳಿಯಪಡಿಸಿದ್ದಾನೆ.

### ಯೇಸುವಿನ ಕುರಿತು ಯೋಹಾನನ ಸಂದೇಶ

(ಮತ್ತಾಯ 3:1-12; ಮಾರ್ಕ 1:2-8; ಲೂಕ 3:15-17)

19 ‘‘ನೀನು ಯಾರು?’’ ಎಂದು ಯೋಹಾನನನ್ನು ಕೇಳು
ವುದಕ್ಕಾಗಿ ಜೆರುಸಲೇಮಿನ ಯೆಹೂದ್ಯರು ಯೋಹಾನನ ಬಳಿಗೆ
ಕೆಲವು ಯಾಜಕರನ್ನು ಮತ್ತು ಲೇವಿಯರನ್ನು* ಕಳುಹಿಸಿದರು.
20 ಯೋಹಾನನು ಮರೆಮಾಚದೆ, ‘‘ನಾನು ಕ್ರಿಸ್ತನಲ್ಲ’’
ಎಂದು ಹೇಳಿದನು.

21 ಯೆಹೂದ್ಯರು ಯೋಹಾನನಿಗೆ, ‘‘ಹಾಗಾದರೆ ನೀನು
ಯಾರು? ನೀನು ಎಲೀಯನೋ?’’* ಎಂದು ಕೇಳಿದರು.
ಅವನು, ‘‘ಇಲ್ಲ, ನಾನು ಎಲೀಯನಲ್ಲ’’ ಎಂದು ಅವನು
ಉತ್ತರಿಸಿದನು.

ಯೆಹೂದ್ಯರು, ‘‘ನೀನು ಪ್ರವಾದಿಯೋ?’’ ಎಂದು ಕೇಳಿ
ದರು. ‘‘ಇಲ್ಲ, ನಾನು ಪ್ರವಾದಿಯಲ್ಲ’’ ಎಂದು ಉತ್ತರ
ಕೊಟ್ಟನು.

22 ಆಗ ಯೆಹೂದ್ಯರು, ‘‘ನಮಗೆ ಹೇಳು. ನಮ್ಮನ್ನು
ಕಳುಹಿಸಿದವರಿಗೆ ನಾವು ತಿಳಿಸಬೇಕಾಗಿದೆ. ನಿನ್ನ ಬಗ್ಗೆ ನೀನು
ಏನು ಹೇಳುವೆ?’’ ಎಂದು ಕೇಳಿದರು.
23 ಅದಕ್ಕೆ ಯೋಹಾನನು,

> ‘‘‘ಪ್ರಭುವಿಗಾಗಿ ನೇರವಾದ ದಾರಿಯನ್ನು ಸಿದ್ಧ
> ಗೊಳಿಸಿರಿ’ ಎಂದು ಅಡವಿಯಲ್ಲಿ ಕೂಗುವವನ
> ಸ್ವರವೇ ನಾನು’’
>
> *ಯೆಶಾಯ 40:3*

---

**ವಾಕ್ಯ** ಇಲ್ಲಿ ಇದರರ್ಥ ಕ್ರಿಸ್ತನು.

**ಯೋಹಾನ** ಸ್ನಾನಿಕ ಯೋಹಾನ. ಇವನು ಕ್ರಿಸ್ತನ ಬರುವಿಕೆಯ ಬಗ್ಗೆ ಜನರಿಗೆ ಬೋಧಿಸಿದನು.

**ಲೇವಿಯರು** ದೇವಾಲಯದಲ್ಲಿ ಯೆಹೂದ್ಯ ಯಾಜಕರುಗಳಿಗೆ ಸಹಾಯ ಮಾಡುತ್ತಿದ್ದ ಲೇವಿ ಕುಲದವರು.

**ಎಲೀಯ** ಕ್ರಿ. ಪೂ. 850 ರಲ್ಲಿ ಜೀವಿಸಿದ್ದ ಪ್ರವಾದಿ.

ಎಂದು ಪ್ರವಾದಿಯಾದ ಯೆಶಾಯನ ಮಾತುಗಳಲ್ಲೇ ಉತ್ತರ ಕೊಟ್ಟನು.

24ಕಳುಹಿಸಲ್ಪಟ್ಟಿದ್ದವರಲ್ಲಿ ಕೆಲವು ಮಂದಿ ಫರಿಸಾಯರೂ* ಇದ್ದರು. 25ಅವರು ಅವನಿಗೆ, ‘‘ನೀನು ನಿನ್ನ ಬಗ್ಗೆ, ‘ನಾನು ಕ್ರಿಸ್ತನೂ ಅಲ್ಲ, ಎಲೀಯನೂ ಅಲ್ಲ, ಪ್ರವಾದಿಯೂ ಅಲ್ಲ, ಎಂದು ಹೇಳುತ್ತಿರುವೆ. ಹಾಗಾದರೆ ನೀನು ಜನರಿಗೆ ಏಕೆ ದೀಕ್ಷಾಸ್ನಾನ ಮಾಡಿಸುವೆ?’’ ಎಂದು ಕೇಳಿದರು.

26ಯೋಹಾನನು, ‘‘ನಾನು ಜನರಿಗೆ ನೀರಿನಿಂದ ದೀಕ್ಷಾಸ್ನಾನ ಮಾಡಿಸುವೆನು. ಆದರೆ ನಿಮಗೆ ಗೊತಿಲ್ಲದ ಒಬ್ಬನು ಇಲ್ಲಿದ್ದಾನೆ. 27ನನ್ನ ನಂತರ ಬರುವವನು ಆತನೇ. ಆತನ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು ಯೋಗ್ಯನಲ್ಲ’’ ಎಂದು ಹೇಳಿದನು.

28ಜೋರ್ಡನ್ ನದಿಯ ಆಚೆದಡದಲ್ಲಿದ್ದ ಬೆಥಾನಿಯ ಎಂಬ ಊರಲ್ಲಿ ಈ ಸಂಗತಿಗಳೆಲ್ಲಾ ನಡೆದವು. ಯೋಹಾನನು ಜನರಿಗೆ ದೀಕ್ಷಾಸ್ನಾನ ಮಾಡಿಸುತ್ತಿದ್ದದ್ದು ಇಲ್ಲಿಯೇ.

29ಮರುದಿನ ಯೋಹಾನನು, ತನ್ನ ಬಳಿಗೆ ಬರುತ್ತಿದ್ದ ಯೇಸುವನ್ನು ಕಂಡು, ‘‘ಇಗೋ, ಯಜ್ಞಕ್ಕಾಗಿ ದೇವರು ನೇಮಿಸಿದ ಕುರಿಮರಿ. ಆತನು ಈ ಲೋಕದ ಪಾಪಗಳನ್ನು ಪರಿಹರಿಸುವನು. 30‘ನನ್ನ ನಂತರ ಒಬ್ಬ ವ್ಯಕ್ತಿಯು ಬರುವನು. ಆತನು ನನಗಿಂತಲೂ ದೊಡ್ಡವನು. ಏಕೆಂದರೆ ಆತನು ನನಗಿಂತಲೂ ಮೊದಲೇ ಇದ್ದವನು ಮತ್ತು ಯಾವಾಗಲೂ ಇದ್ದವನು’ ಎಂದು ನಾನು ಹೇಳುತ್ತಿದ್ದುದು ಈತನ ವಿಷಯವಾಗಿಯೇ. 31ಆತನು ಯಾರೆಂಬುದು ನನಗೂ ಗೊತ್ತಿರಲಿಲ್ಲ. ಆದರೆ ಆತನನ್ನು ಇಸ್ರೇಲರಿಗೆ ತಿಳಿಸುವದಕ್ಕೋಸ್ಕರ ನಾನು ಜನರಿಗೆ ನೀರಿನಿಂದ ದೀಕ್ಷಾಸ್ನಾನ ಕೊಡುತ್ತಿದ್ದೆನು’’ ಎಂದು ಹೇಳಿದನು.

32-33ಇದಲ್ಲದೆ ಯೋಹಾನನು ಸಾಕ್ಷಿಕೊಟ್ಟು ಹೇಳಿದ್ದೇನೆಂದರೆ, ‘‘ಆತನು ಯಾರೆಂದು ನನಗೂ ಗೊತ್ತಿರಲಿಲ್ಲ. ಆದರೆ ಜನರಿಗೆ ದೀಕ್ಷಾಸ್ನಾನ ಕೊಡಲು ನನ್ನನ್ನು ಕಳುಹಿಸಿದಾತನು ನನಗೆ, ‘ಪವಿತ್ರಾತ್ಮನು* ಇಳಿದು ಬಂದು ಒಬ್ಬ ವ್ಯಕ್ತಿಯ ಮೇಲೆ ನೆಲಸುವುದನ್ನು ನೀನು ನೋಡುವೆ. ಪವಿತ್ರಾತ್ಮನಿಂದ ದೀಕ್ಷಾಸ್ನಾನ ಕೊಡುವವನು ಆ ವ್ಯಕ್ತಿಯೇ’ ಎಂದು ಹೇಳಿದ್ದನು. ಇದು ನೆರವೇರುವುದನ್ನು ನಾನು ಕಣ್ಣಾರೆ ಕಂಡಿದ್ದೇನೆ. ಪವಿತ್ರಾತ್ಮನು ಪರಲೋಕದಿಂದ ಪಾರಿವಾಳದ ರೂಪದಲ್ಲಿ ಇಳಿದುಬಂದು ಆತನ (ಯೇಸುವಿನ) ಮೇಲೆ ನೆಲಸುವುದನ್ನು ನಾನು ನೋಡಿದೆನು.

34ಆದ್ದರಿಂದ ಆತನೇ (ಯೇಸುವೇ) ದೇವರ ಮಗನೆಂದು ನಾನು ಜನರಿಗೆ ತಿಳಿಸುವೆನು’’ ಎಂದನು.

### ಯೇಸುವಿನ ಪ್ರಥಮ ಶಿಷ್ಯರು

35ಮರುದಿನ ಯೋಹಾನನು ತನ್ನ ಇಬ್ಬರು ಶಿಷ್ಯರೊಂದಿಗೆ ಇದ್ದಾಗ, 36ಸಮೀಪದಲ್ಲಿ ನಡೆದುಹೋಗುತ್ತಿದ್ದ ಯೇಸುವನ್ನು ಕಂಡು, ‘‘ಇಗೋ, ಯಜ್ಞಕ್ಕೆ ದೇವರು ನೇಮಿಸಿದ ಕುರಿಮರಿ!’’ ಎಂದು ಹೇಳಿದನು.

37ಯೋಹಾನನ ಈ ಮಾತನ್ನು ಕೇಳಿದ ಆ ಇಬ್ಬರು ಶಿಷ್ಯರು ಯೇಸುವನ್ನು ಹಿಂಬಾಲಿಸಿದರು. 38ಯೇಸು ಹಿಂತಿರುಗಿ ನೋಡಿ, ‘‘ನಿಮಗೇನು ಬೇಕು?’’ ಎಂದು ಕೇಳಿದನು.

ಆ ಇಬ್ಬರು, ‘‘ರಬ್ಬಿ, ನೀನು ಎಲ್ಲಿ ಇಳಿದುಕೊಂಡಿರುವೆ’’ ಎಂದು ಕೇಳಿದರು. (‘‘ರಬ್ಬಿ’’ ಅಂದರೆ ‘‘ಗುರು’’ ಎಂದರ್ಥ.)

39ಯೇಸು, ‘‘ನನ್ನೊಂದಿಗೆ ಬನ್ನಿ, ಆಗ ನೀವೇ ನೋಡುವಿರಿ’’ ಎಂದು ಹೇಳಿದನು. ಆದ್ದರಿಂದ ಆ ಇಬ್ಬರು ಹೋಗಿ ಯೇಸು ಇಳಿದುಕೊಂಡಿದ್ದ ಸ್ಥಳವನ್ನು ನೋಡಿದರು. ಆ ದಿನ ಅವರು ಅಲ್ಲಿಯೇ ಆತನೊಂದಿಗೆ ಇದ್ದರು. ಆಗ ಸಾಯಂಕಾಲ ಸುಮಾರು ನಾಲ್ಕು ಗಂಟೆಯಾಗಿತ್ತು.

40ಈ ಇಬ್ಬರು ಯೋಹಾನನ ಮಾತನ್ನು ಕೇಳಿ ಯೇಸುವನ್ನು ಹಿಂಬಾಲಿಸಿದರು. ಸೀಮೋನ್ ಪೇತ್ರನ ತಮ್ಮನಾದ ಅಂದ್ರೆಯನು ಇವರಲ್ಲಿ ಒಬ್ಬನಾಗಿದ್ದನು. 41ಮೊದಲನೆಯದಾಗಿ, ಅವನು ತನ್ನ ಅಣ್ಣನಾದ ಸೀಮೋನನನ್ನು ಕಾಣಲು ಹೋಗಿ ಅವನಿಗೆ, ‘‘ನಾವು ಮೆಸ್ಸೀಯನನ್ನು ಕಂಡುಕೊಂಡೆವು’’ ಎಂದು ಹೇಳಿದನು. (‘‘ಮೆಸ್ಸೀಯ’’ ಅಂದರೆ ‘‘ಕ್ರಿಸ್ತನು’’ ಎಂದರ್ಥ.)

42ಅವನು ಸೀಮೋನನನ್ನು ಯೇಸುವಿನ ಬಳಿಗೆ ಕರೆದುಕೊಂಡು ಬಂದನು. ಯೇಸು ಸೀಮೋನನ ಕಡೆಗೆ ನೋಡಿ, ‘‘ಯೋಹಾನನ ಮಗನಾದ ನಿನ್ನ ಹೆಸರು ಸೀಮೋನ. ನೀನು ಕೇಫನೆಂದು ಕರೆಸಿಕೊಳ್ಳುವೆ’’ ಎಂದು ಹೇಳಿದನು. (‘‘ಕೇಫ’’ ಅಂದರೆ ‘‘ಪೇತ್ರ’’ ಎಂದರ್ಥ).

43ಮರುದಿನ ಯೇಸು ಗಲಿಲೀಯಕ್ಕೆ ಹೋಗಲು ನಿರ್ಧರಿಸಿದನು. ಯೇಸು ಫಿಲಿಪ್ಪನನ್ನು ಕಂಡು ಅವನಿಗೆ, ‘‘ನನ್ನನ್ನು ಹಿಂಬಾಲಿಸು’’ ಎಂದು ಹೇಳಿದನು. 44ಅಂದ್ರೆಯ ಮತ್ತು ಪೇತ್ರರಂತೆ ಫಿಲಿಪ್ಪನು ಸಹ ಬೆತ್ಸಾಯಿದ ಎಂಬ ಊರಿನವನಾಗಿದ್ದನು. 45ಫಿಲಿಪ್ಪನು ನತಾನಿಯೇಲನನ್ನು ಕಂಡು ಅವನಿಗೆ, ‘‘ಯಾವನ ವಿಷಯದಲ್ಲಿ ಮೋಶೆಯು ಧರ್ಮಶಾಸ್ತ್ರದಲ್ಲಿ ಬರೆದನೋ ಮತ್ತು ಪ್ರವಾದಿಗಳು ಬರೆದರೋ ಆತನನ್ನು ನಾವು ಕಂಡುಕೊಂಡೆವು. ಆತನ ಹೆಸರು ಯೇಸು. ಆತನು ಯೋಸೇಫನ ಮಗನು. ಆತನು ನಜರೇತಿನವನು’’ ಎಂದು ಹೇಳಿದನು.

46ಆದರೆ ನತಾನಿಯೇಲನು ಫಿಲಿಪ್ಪನಿಗೆ, ‘‘ನಜರೇತಿನಿಂದ ಒಳ್ಳೆಯದೇನಾದರೂ ಬರುವುದೇ?’’ ಎಂದು ಕೇಳಿದನು.

ಫಿಲಿಪ್ಪನು, ‘‘ಬಂದು ನೋಡು’’ ಎಂದು ಉತ್ತರಕೊಟ್ಟನು.

47ಯೇಸು ತನ್ನ ಬಳಿಗೆ ಬರುತ್ತಿದ್ದ ನತಾನಿಯೇಲನನ್ನು ಕಂಡು ಅವನ ಬಗ್ಗೆ, ‘‘ಇವನು ನಿಜವಾದ ಇಸ್ರೇಲ. ಇವನಲ್ಲಿ ಕಪಟವಿಲ್ಲ’’ ಎಂದು ಹೇಳಿದನು.

48ನತಾನಿಯೇಲನು, ‘‘ನೀನು ನನ್ನನ್ನು ಹೇಗೆ ಬಲ್ಲೆ?’’ ಎಂದು ಕೇಳಿದನು. ಯೇಸು, ‘‘ಫಿಲಿಪ್ಪನು ನನ್ನ ಬಗ್ಗೆ ನಿನಗೆ ತಿಳಿಸುವುದಕ್ಕಿಂತ ಮೊದಲೇ ನೀನು ಅಂಜೂರದ ಮರದ ಕೆಳಗಿದ್ದಾಗ ನಾನು ನಿನ್ನನ್ನು ನೋಡಿದೆನು’’ ಎಂದು ಹೇಳಿದನು.

49ಆಗ ನತಾನಿಯೇಲನು ಯೇಸುವಿಗೆ, ‘‘ಗುರುವೇ, ನೀನೇ ದೇವರ ಮಗನು. ನೀನೇ ಇಸ್ರೇಲರ ರಾಜ’’ ಎಂದು ಹೇಳಿದನು.

50ಯೇಸು ನತಾನಿಯೇಲನಿಗೆ, ‘‘ನಿನ್ನನ್ನು ಅಂಜೂರದ ಮರದ ಕೆಳಗೆ ನೋಡಿದೆನೆಂದು ನಾನು ನಿನಗೆ ಹೇಳಿದ್ದರಿಂದ ನೀನು ನನ್ನನ್ನು ನಂಬುವೆ. ಆದರೆ ಅದಕ್ಕಿಂತಲೂ ಹೆಚ್ಚು ದೊಡ್ಡ ಕಾರ್ಯಗಳನ್ನು ನೀನು ನೋಡುವೆ!’’ ಎಂದು ಹೇಳಿದನು. 51ಅದಲ್ಲದೆ ಯೇಸು, ‘‘ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.

---

**ಫರಿಸಾಯರು** ಯೆಹೂದ್ಯರ ಒಂದು ಧಾರ್ಮಿಕ ಪಂಗಡದವರು.

**ಪವಿತ್ರಾತ್ಮನು** ದೇವರಾತ್ಮನು, ಕ್ರಿಸ್ತನ ಆತ್ಮನು ಮತ್ತು ಸಹಾಯಕನು ಎಂಬುದಾಗಿ ಕರೆಯಲಾಗಿದೆ.

ಪರಲೋಕವು ತೆರೆದಿರುವುದನ್ನೂ ಮನುಷ್ಯಕುಮಾರನ ಮೇಲೆ
ದೇವದೂತರುಗಳು ಏರಿಹೋಗುವುದನ್ನೂ ಕೆಳಗೆ ಇಳಿದು
ಬರುವುದನ್ನೂ ನೀವು ನೋಡುವಿರಿ'' ಎಂದು ಹೇಳಿದನು.

### ಕಾನಾ ಊರಿನಲ್ಲಿ ಮದುವೆ

2 ಮಾರನೆಯ ದಿನ ಗಲಿಲೇಯದ ಕಾನಾ ಊರಿನಲ್ಲಿ
ಒಂದು ಮದುವೆ ಇತ್ತು. ಯೇಸುವಿನ ತಾಯಿಯೂ
ಬಂದಿದ್ದಳು. 2ಯೇಸು ಮತ್ತು ಆತನ ಶಿಷ್ಯರನ್ನು ಸಹ ಮದುವೆಗೆ
ಆಹ್ವಾನಿಸಲಾಗಿತ್ತು. 3ಮದುವೆಯಲ್ಲಿ ಸಾಕಷ್ಟು ದ್ರಾಕ್ಷಾರಸ
ವಿರಲಿಲ್ಲ. ಇದ್ದ ದ್ರಾಕ್ಷಾರಸವೆಲ್ಲಾ ಮುಗಿದುಹೋದಾಗ
ಯೇಸುವಿನ ತಾಯಿಯು ಆತನಿಗೆ, ''ಅವರಲ್ಲಿ ದ್ರಾಕ್ಷಾರಸವೇ
ಇಲ್ಲ'' ಎಂದು ತಿಳಿಸಿದಳು. 4ಯೇಸು, ''ಅಮ್ಮಾ, ನನ್ನ ಗೊಡವೆ
ನಿನಗೇಕೆ? ನನ್ನ ಸಮಯ ಇನ್ನೂ ಬಂದಿಲ್ಲ'' ಎಂದು ಉತ್ತರ
ಕೊಟ್ಟನು. 5ಯೇಸುವಿನ ತಾಯಿ ಸೇವಕರಿಗೆ, ''ಯೇಸು ನಿಮಗೆ
ಏನು ಹೇಳುತ್ತಾನೊ ಅದನ್ನು ಮಾಡಿರಿ'' ಎಂದು ಹೇಳಿದಳು.
6ಕಲ್ಲಿನಿಂದ ಮಾಡಿದ ಆರು ದೊಡ್ಡ ಬಾನೆಗಳು ಅಲ್ಲಿದ್ದವು.
ಯೆಹೂದ್ಯರು ಶುದ್ಧಾಚಾರಗಳಿಗಾಗಿ ಈ ಕಲ್ಲಿನ ಬಾನೆಗಳನ್ನು
ಉಪಯೋಗಿಸುತ್ತಿದ್ದರು. ಪ್ರತಿಯೊಂದು ಬಾನೆಯೂ
ಸುಮಾರು ನೂರು ಲೀಟರ್‌ಗಳಷ್ಟು ನೀರು ಹಿಡಿಯುತ್ತಿತ್ತು.

7ಯೇಸು ಸೇವಕರಿಗೆ, ''ಆ ಬಾನೆಗಳಲ್ಲಿ ನೀರನ್ನು ತುಂಬಿರಿ''
ಎಂದು ಹೇಳಿದನು. ಅಂತೆಯೇ ಸೇವಕರು ಆ ಬಾನೆಗಳ
ಕಂಠದವರೆಗೂ ನೀರನ್ನು ತುಂಬಿದರು. 8ಬಳಿಕ ಯೇಸು
ಸೇವಕರಿಗೆ, ''ಈಗ ಸ್ವಲ್ಪ ನೀರನ್ನು ತೆಗೆದುಕೊಂಡು ಹೋಗಿ
ಔತಣದ ಮೇಲ್ವಿಚಾರಕನಿಗೆ ಕೊಡಿರಿ'' ಎಂದು ಹೇಳಿದನು.

ಅಂತೆಯೇ ಅವರು ಅದನ್ನು ತೆಗೆದುಕೊಂಡು ಹೋದರು.
9ಮದುವೆಯ ಮೇಲ್ವಿಚಾರಕನು ದ್ರಾಕ್ಷಾರಸವಾಗಿ ಮಾರ್ಪ
ಟ್ಟಿದ್ದ ನೀರನ್ನು ರುಚಿನೋಡಿದನು. ದ್ರಾಕ್ಷಾರಸವು ಎಲ್ಲಿಂದ
ಬಂತೆಂಬುದು ಅವನಿಗೆ ಗೊತ್ತಿರಲಿಲ್ಲ. ಆದರೆ ಅದು ಆ
ಸೇವಕರಿಗೆ ತಿಳಿದಿತ್ತು. ಮದುವೆಯ ಮೇಲ್ವಿಚಾರಕನು ಮದು
ಮಗನನ್ನು ಕರೆದು, 10''ಜನರು ಉತ್ತಮವಾದ ದ್ರಾಕ್ಷಾರಸ
ವನ್ನು ಯಾವಾಗಲೂ ಮೊದಲು ಹಂಚುತ್ತಾರೆ. ಅತಿಥಿಗಳು
ಕುಡಿದು ಮತ್ತರಾದ ಮೇಲೆ ಅವರಿಗೆ ಕಡಿಮೆ ದರ್ಜೆಯ
ದ್ರಾಕ್ಷಾರಸವನ್ನು ಕೊಡುತ್ತಾರೆ. ಆದರೆ ನೀನು ಉತ್ತಮವಾದ
ದ್ರಾಕ್ಷಾರಸವನ್ನು ಈವರೆಗೂ ಇಟ್ಟಿರುವೆ!'' ಎಂದು ಹೇಳಿದನು.

11ಯೇಸು ಮಾಡಿದ ಮೊದಲನೆಯ ಅದ್ಭುತಕಾರ್ಯವಿದು.
ಯೇಸು ಇದನ್ನು ಗಲಿಲೇಯದ ಕಾನಾ ಊರಿನಲ್ಲಿ ಮಾಡಿ ತನ್ನ
ಮಹತ್ವವನ್ನು ತೋರಿದನು. ಆತನ ಶಿಷ್ಯರೂ ಆತನಲ್ಲಿ ನಂಬಿಕೆ
ಇಟ್ಟರು.

### ದೇವಾಲಯದಲ್ಲಿ ಯೇಸು

(ಮತ್ತಾಯ 21:12-13; ಮಾರ್ಕ 11:15-17; ಲೂಕ 19:45-46)

12ಬಳಿಕ ಯೇಸು ಕಪೆರ್ನೌಮ್ ಎಂಬ ಊರಿಗೆ
ಹೋದನು. ಯೇಸುವಿನ ತಾಯಿ ಮತ್ತು ಸಹೋದರರು ಹಾಗೂ
ಆತನ ಶಿಷ್ಯರು ಆತನೊಡನೆ ಹೋದರು. ಅವರೆಲ್ಲರೂ
ಕಪೆರ್ನೌಮ್‌ನಲ್ಲಿ ಕೆಲವು ದಿನ ತಂಗಿದ್ದರು. 13ಆಗ
ಯೆಹೂದ್ಯರ ಪಸ್ಕಹಬ್ಬ ಬಹು ಸಮೀಪವಾಗಿತ್ತು. ಆದ್ದರಿಂದ
ಯೇಸು ಜೆರುಸಲೇಮಿಗೆ ಹೋದನು. 14ದೇವಾಲಯದಲ್ಲಿ
ಜನರು ದನ, ಕುರಿ ಮತ್ತು ಪಾರಿವಾಳಗಳನ್ನು ಮಾರುತ್ತಿರು
ವುದನ್ನು ಯೇಸು ಕಂಡನು. ಇತರ ಕೆಲವು ಜನರು ಮೇಜುಗಳ
ಸಮೀಪದಲ್ಲಿ ಕುಳಿತುಕೊಂಡು ಹಣ ವಿನಿಮಯ ಮಾಡು
ತ್ತಿದ್ದರು ಮತ್ತು ವ್ಯಾಪಾರ ಮಾಡುತ್ತಿದ್ದರು. 15ಯೇಸು ಹಗ್ಗದ
ಕೆಲವು ತುಂಡುಗಳನ್ನು ತೆಗೆದುಕೊಂಡು ಅವುಗಳಿಂದ ಒಂದು
ಚಾವಟಿ ಮಾಡಿ ಆ ಜನರನ್ನು ಮತ್ತು ದನಕುರಿಗಳನ್ನು
ಬಲವಂತವಾಗಿ ದೇವಾಲಯದಿಂದ ಹೊರಗಟ್ಟಿದನು. ಯೇಸು
ಮೇಜುಗಳನ್ನು ಕೆಡವಿ, ಹಣ ವಿನಿಮಯ ಮಾಡುತ್ತಿದ್ದ ಜನರ
ಹಣವನ್ನು ಚೆಲ್ಲಿದನು. 16ಪಾರಿವಾಳಗಳನ್ನು ಮಾರುತ್ತಿದ್ದವರಿಗೆ,
''ಇವುಗಳನ್ನು ಹೊರಗೆ ತೆಗೆದುಕೊಂಡು ಹೋಗಿರಿ! ನನ್ನ
ತಂದೆಯ ಮನೆಯನ್ನು ವ್ಯಾಪಾರ ಸ್ಥಳವನ್ನಾಗಿ ಮಾಡಬೇಡಿ!''
ಎಂದು ಹೇಳಿದನು.

17''ನಿನ್ನ ಆಲಯದ ಮೇಲಿನ ಅಭಿಮಾನವು
ನನ್ನೊಳಗೆ ಬೆಂಕಿಯಂತೆ ಸುಡುತ್ತದೆ''
*ಕೀರ್ತನೆ 69:9*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿರುವ ವಾಕ್ಯವನ್ನು ಯೇಸುವಿನ
ಶಿಷ್ಯರು ಆಗ ಜ್ಞಾಪಿಸಿಕೊಂಡರು.

18ಯೆಹೂದ್ಯರು ಯೇಸುವಿಗೆ, ''ಇಷ್ಟೆಲ್ಲಾ ಮಾಡಲು ನಿನಗೆ
ಅಧಿಕಾರವಿದೆ ಎಂದು ರುಜುವಾತುಪಡಿಸಲು ಯಾವ ಸೂಚಕ
ಕಾರ್ಯವನ್ನು ಮಾಡುವೆ?'' ಎಂದು ಕೇಳಿದರು.

19ಯೇಸು, ''ಈ ದೇವಾಲಯವನ್ನು ಕೆಡವಿರಿ, ಮೂರು
ದಿನಗಳಲ್ಲಿ ಅದನ್ನು ಮತ್ತೆ ಕಟ್ಟುತ್ತೇನೆ'' ಎಂದು ಉತ್ತರ
ಕೊಟ್ಟನು.

20ಯೆಹೂದ್ಯರು, ''ಈ ದೇವಾಲಯವನ್ನು ಕಟ್ಟಲು ಜನರು
ನಲವತ್ತಾರು ವರ್ಷಗಳ ಕಾಲ ದುಡಿದಿದ್ದಾರೆ! ನೀನು ಮೂರೇ
ದಿನಗಳಲ್ಲಿ ಇದನ್ನು ಕಟ್ಟಬಲ್ಲೆಯಾ?'' ಎಂದು ಕೇಳಿದರು.

21(ಆದರೆ ಯೇಸು ತನ್ನ ದೇಹವೇ ದೇವಾಲಯವೆಂಬ
ಅರ್ಥದಲ್ಲಿ ಹೇಳಿದ್ದನು. 22ಯೇಸು ಸತ್ತವರೊಳಗಿಂದ ಎದ್ದು
ಬಂದಾಗ ಆತನ ಶಿಷ್ಯರು ಆತನ ಈ ಮಾತನ್ನು ಜ್ಞಾಪಿಸಿ
ಕೊಂಡರು. ಅವರು ಪವಿತ್ರ ಗ್ರಂಥವನ್ನು ಮತ್ತು ಆತನು ಹೇಳಿದ
ಮಾತುಗಳನ್ನು ನಂಬಿದರು.)

23ಯೇಸು ಪಸ್ಕಹಬ್ಬಕ್ಕಾಗಿ ಜೆರುಸಲೇಮಿನಲ್ಲಿದ್ದನು.
ಆತನು ಮಾಡಿದ ಸೂಚಕಕಾರ್ಯಗಳನ್ನು ನೋಡಿದಾಗ ಅನೇಕ
ಜನರು ಆತನನ್ನು ನಂಬಿದರು. 24ಆದರೆ ಯೇಸು ಅವರಲ್ಲಿ
ಭರವಸೆ ಇಡಲಿಲ್ಲ. ಏಕೆಂದರೆ ಆತನು ಅವರನ್ನು ಚೆನ್ನಾಗಿ ಬಲ್ಲವ
ನಾಗಿದ್ದನು. 25ಯೇಸುವಿಗೆ ಜನರ ಬಗ್ಗೆ ಯಾರೂ ತಿಳಿಸುವ
ಅಗತ್ಯವಿರಲಿಲ್ಲ. ಮನುಷ್ಯನ ಮನಸ್ಸಿನಲ್ಲಿ ಏನಿದೆ ಎಂಬುದು
ಯೇಸುವಿಗೆ ಗೊತ್ತಿತ್ತು.

### ಯೇಸು ಮತ್ತು ನಿಕೊದೇಮ

3 ನಿಕೊದೇಮ ಎಂಬ ಒಬ್ಬ ಮನುಷ್ಯನಿದ್ದನು.
ನಿಕೊದೇಮನು ಫರಿಸಾಯರಲ್ಲಿ ಒಬ್ಬನಾಗಿದ್ದನು. ಅವನು
ಒಬ್ಬ ಮುಖ್ಯ ಯೆಹೂದ್ಯನಾಯಕನಾಗಿದ್ದನು. 2ಒಂದು
ರಾತ್ರಿ ನಿಕೊದೇಮನು ಯೇಸುವಿನ ಬಳಿಗೆ ಬಂದನು.

ನಿಕೊದೇಮನು, ‘‘ಗುರುವೇ, ನೀನು ದೇವರಿಂದ ಕಳುಹಿಸಲ್ಪಟ್ಟ
ಉಪದೇಶಕನೆಂದು ನಮಗೆ ಗೊತ್ತಿದೆ. ನೀನು ಮಾಡುವ ಈ
ಸೂಚಕಕಾರ್ಯಗಳನ್ನು ದೇವರ ಸಹಾಯದಿಂದಲ್ಲದೆ ಯಾರೂ
ಮಾಡಲಾರರು’’ ಎಂದು ಹೇಳಿದನು.

3ಯೇಸು ‘‘ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ಒಬ್ಬನು
ಹೊಸದಾಗಿ ಹುಟ್ಟಲೇಬೇಕು. ಒಬ್ಬನು ಹೊಸದಾಗಿ ಹುಟ್ಟಿಲ್ಲ
ದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು’’ ಎಂದು
ಉತ್ತರಿಸಿದನು.

4ನಿಕೊದೇಮನು, ‘‘ಮನುಷ್ಯನು ಮುದುಕನಾದ ಮೇಲೆ
ಹುಟ್ಟುವುದು ಹೇಗೆ? ಒಬ್ಬನು ತನ್ನ ತಾಯಿಯ ಗರ್ಭದೊಳಗೆ
ಮತ್ತೆ ಪ್ರವೇಶಿಸಲು ಸಾಧ್ಯವೇ?’’ ಎಂದು ಕೇಳಿದನು.

5ಅದಕ್ಕೆ ಯೇಸು, ‘‘ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.
ಒಬ್ಬನು ನೀರಿನಿಂದಲೂ ಆತ್ಮನಿಂದಲೂ ಹುಟ್ಟಲೇಬೇಕು.
ಇಲ್ಲವಾದರೆ ಅವನು ದೇವರ ರಾಜ್ಯವನ್ನು ಪ್ರವೇಶಿಸಲಾರನು.
6ದೇಹವು ಮಾನುಷ್ಯ ತಂದೆತಾಯಿಗಳಿಂದ ಹುಟ್ಟಿದ್ದು. ಆದರೆ
ಆತ್ಮಿಕ ಜೀವನವು ಆತ್ಮನಿಂದ ಹುಟ್ಟಿದ್ದು. 7‘ನೀನು ಹೊಸದಾಗಿ
ಹುಟ್ಟಲೇಬೇಕು’ ಎಂದು ನಾನು ಹೇಳಿದ್ದಕ್ಕೆ ಆಶ್ಚರ್ಯ
ಪಡಬೇಡ. 8ಗಾಳಿಯು ತನಗಿಷ್ಟ ಬಂದ ಕಡೆಗೆ ಹೋಗುತ್ತದೆ.
ಗಾಳಿ ಬೀಸುವ ಶಬ್ದವನ್ನು ನೀನು ಕೇಳುವೆ. ಆದರೆ ಗಾಳಿ ಎಲ್ಲಿಂದ
ಬರುತ್ತದೋ ಮತ್ತು ಎಲ್ಲಿಗೆ ಹೋಗುತ್ತದೋ ನಿನಗೆ ತಿಳಿ
ಯದು. ಆತ್ಮದಿಂದ ಹುಟ್ಟಿದ ಪ್ರತಿಯೊಬ್ಬರೂ ಅದರಂತಿದ್ದಾರೆ’’
ಎಂದು ಹೇಳಿದನು.

9ನಿಕೊದೇಮನು, ‘‘ಇದೆಲ್ಲಾ ಹೇಗೆ ಸಾಧ್ಯ?’’ ಎಂದು
ಕೇಳಿದನು. 10ಯೇಸು, ‘‘ನೀನು ಇಸ್ರೇಲಿನ ಉಪದೇಶಕ
ನಾಗಿರುವೆ. ಆದರೆ ನಿನಗೆ ಈ ಸಂಗತಿಗಳು ಇನ್ನೂ ಅರ್ಥ
ವಾಗುವುದಿಲ್ಲವೇ? 11ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.
ನಮಗೆ ಗೊತ್ತಿರುವುದರ ಬಗ್ಗೆ ನಾವು ಮಾತಾಡುತ್ತೇವೆ. ನಾವು
ಕಂಡದ್ದರ ಬಗ್ಗೆ ನಾವು ಸಾಕ್ಷಿ ಕೊಡುತ್ತೇವೆ.ಆದರೆ ನಾವು
ಹೇಳುವುದನ್ನು ನೀವು ಸ್ವೀಕರಿಸಿಕೊಳ್ಳುವುದಿಲ್ಲ. 12ನಾನು ನಿನಗೆ
ಭೂಲೋಕದ ಸಂಗತಿಗಳ ಬಗ್ಗೆ ಹೇಳಿದೆ. ಆದರೆ ನೀನು ನನ್ನನ್ನು
ನಂಬುವುದಿಲ್ಲ. ಆದ್ದರಿಂದ ನಾನು ಪರಲೋಕದ ಸಂಗತಿಗಳ
ಬಗ್ಗೆ ನಿನಗೆ ಹೇಳಿದರೂ ನೀನು ಖಂಡಿತವಾಗಿ ನಂಬುವುದಿಲ್ಲ!
13ಪರಲೋಕದಿಂದ ಇಳಿದು ಬಂದ ಮನುಷ್ಯಕುಮಾರ
ನೊಬ್ಬನೇ ಪರಲೋಕಕ್ಕೆ ಏರಿಹೋದ ಏಕೈಕ ವ್ಯಕ್ತಿಯಾಗಿದ್ದಾನೆ.

14‘‘ಮೋಶೆಯು ಮರಳುಗಾಡಿನಲ್ಲಿ ಸರ್ಪವನ್ನು ಎತ್ತರ
ವಾದ ಕಂಬದ ಮೇಲಿಟ್ಟನು. ಅಂತೆಯೇ ಮನುಷ್ಯಕುಮಾರ
ನನ್ನು ಸಹ ಎತ್ತರವಾದ ಕಂಬದ ಮೇಲಿಡಬೇಕು. 15ಆತನಲ್ಲಿ
ನಂಬಿಕೆ ಇಡುವ ಪ್ರತಿಯೊಬ್ಬರೂ ನಿತ್ಯಜೀವವನ್ನು ಹೊಂದಿ
ಕೊಳ್ಳುವರು’’ ಎಂದು ಹೇಳಿದನು.

16ಹೌದು, ದೇವರು ಲೋಕವನ್ನು ಎಷ್ಟೋ ಪ್ರೀತಿಸಿ ತನ್ನ
ಒಬ್ಬನೇ ಮಗನನ್ನು ಕೊಟ್ಟನು. ಆತನನ್ನು ನಂಬುವ
ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಹೊಂದ
ಬೇಕೆಂದು ದೇವರು ತನ್ನ ಮಗನನ್ನು ಕೊಟ್ಟನು. 17ದೇವರು
ತನ್ನ ಮಗನನ್ನು ಈ ಲೋಕಕ್ಕೆ ಕಳುಹಿಸಿದ್ದು ಆತನ ಮೂಲಕವಾಗಿ
ಈ ಲೋಕದ ಜನರನ್ನು ಅಪರಾಧಿಗಳೆಂದು ತೀರ್ಪು
ಮಾಡುವುದಕ್ಕಾಗಿಯಲ್ಲ. ಈ ಲೋಕದವರು ರಕ್ಷಣೆ ಹೊಂದಿ
ಕೊಳ್ಳಲೆಂದು ದೇವರು ಆತನನ್ನು ಕಳುಹಿಸಿಕೊಟ್ಟನು. 18ದೇವರ
ಮಗನಲ್ಲಿ ನಂಬಿಕೆ ಇಡುವವನಿಗೆ ತೀರ್ಪಾಗುವುದಿಲ್ಲ. ಆದರೆ
ನಂಬದವನಿಗೆ ಆಗಲೇ ತೀರ್ಪಾಗಿದೆ. ಏಕೆಂದರೆ, ಅವನು ದೇವರ
ಒಬ್ಬನೇ ಮಗನಲ್ಲಿ ನಂಬಿಕೆ ಇಡಲಿಲ್ಲ. 19ಆ ತೀರ್ಪು ಏನಂದರೆ:
ಬೆಳಕು ಈ ಲೋಕಕ್ಕೆ ಬಂದಿದೆ, ಆದರೆ ಜನರು ಬೆಳಕನ್ನು
ಅಪೇಕ್ಷಿಸದೆ ಕತ್ತಲೆಯನ್ನೇ ಬಯಸಿದರು. ಏಕೆಂದರೆ ಅವರು
ದುಷ್ಟಕಾರ್ಯಗಳನ್ನು ಮಾಡುತ್ತಿದ್ದರು. 20ಕೇಡನ್ನು ಮಾಡುವ
ಪ್ರತಿಯೊಬ್ಬನೂ ಬೆಳಕನ್ನು ದ್ವೇಷಿಸುವನು. ಅವನು ಬೆಳಕಿಗೆ
ಬರುವುದಿಲ್ಲ. ಏಕೆಂದರೆ ಅವನು ಮಾಡಿರುವ ಕೆಟ್ಟ ಕಾರ್ಯ
ಗಳನ್ನೆಲ್ಲಾ ಬೆಳಕು ತೋರಿಸುತ್ತದೆ. 21ಆದರೆ ಸತ್ಯಮಾರ್ಗವನ್ನು
ಅನುಸರಿಸುವವನು ಬೆಳಕಿಗೆ ಬರುತ್ತಾನೆ. ಅವನು ಮಾಡಿರುವ
ಕಾರ್ಯಗಳೆಲ್ಲಾ ದೇವರ ಮೂಲಕವಾಗಿ ಮಾಡಿದ ಕಾರ್ಯ
ಗಳೆಂದು ಬೆಳಕು ತೋರಿಸುತ್ತದೆ.

## ಯೇಸು ಮತ್ತು ಸ್ನಾನಿಕ ಯೋಹಾನ

22ಇದಾದ ನಂತರ, ಯೇಸು ಮತ್ತು ಆತನ ಶಿಷ್ಯರು
ಜುದೇಯ ಪ್ರಾಂತ್ಯಕ್ಕೆ ಹೋದರು. ಅಲ್ಲಿ ಯೇಸು ತನ್ನ ಶಿಷ್ಯ
ರೊಡನೆ ತಂಗಿದ್ದು, ಜನರಿಗೆ ದೀಕ್ಷಾಸ್ನಾನ ಮಾಡಿಸಿದನು.
23ಯೋಹಾನನು ಸಹ ಐನೋನ್ ಎಂಬ ಸ್ಥಳದಲ್ಲಿ ದೀಕ್ಷಾಸ್ನಾನ
ಮಾಡಿಸುತ್ತಿದ್ದನು. ಐನೋನ್ ಎಂಬ ಊರು ಸಲೀಮ್
ಊರಿನ ಸಮೀಪದಲ್ಲಿದೆ. ಅಲ್ಲಿ ಬೇಕಾದಷ್ಟು ನೀರಿದ್ದುದರಿಂದ
ಯೋಹಾನನು ಅಲ್ಲಿ ಜನರಿಗೆ ದೀಕ್ಷಾಸ್ನಾನ ಮಾಡಿಸುತ್ತಿದ್ದನು.
ಜನರು ಅಲ್ಲಿಗೆ ಬಂದು ದೀಕ್ಷಾಸ್ನಾನ ತೆಗೆದುಕೊಳ್ಳುತ್ತಿದ್ದರು.
24(ಆಗ ಯೋಹಾನನನ್ನು ಇನ್ನೂ ಸೆರೆಮನೆಗೆ ಹಾಕಿರಲಿಲ್ಲ.)

25ಯೋಹಾನನ ಶಿಷ್ಯರಲ್ಲಿ ಕೆಲವರಿಗೂ ಮತ್ತೊಬ್ಬ
ಯೆಹೂದ್ಯನಿಗೂ ಶುದ್ಧಾಚಾರದ ಬಗ್ಗೆ ವಾದವಾಯಿತು.
26ಆದ್ದರಿಂದ ಶಿಷ್ಯರು ಯೋಹಾನನ ಬಳಿಗೆ ಬಂದು,
‘‘ಗುರುವೇ, ಜೋರ್ಡನ್ ನದಿಯ ಆಚೆ ದಡದಲ್ಲಿ ನಿನ್ನೊಂದಿ
ಗಿದ್ದ ವ್ಯಕ್ತಿಯನ್ನು ಜ್ಞಾಪಿಸಿಕೊ. ಆತನ ಕುರಿತಾಗಿ ನೀನೇ ಸಾಕ್ಷಿ
ಹೇಳಲಿಲ್ಲವೇ? ಆತನು ಜನರಿಗೆ ದೀಕ್ಷಾಸ್ನಾನ ಕೊಡುತ್ತಿದ್ದಾನೆ.
ಅನೇಕ ಜನರು ಆತನ ಬಳಿಗೆ ಹೋಗುತ್ತಿದ್ದಾರೆ’’ ಎಂದು
ಹೇಳಿದರು. 27ಯೋಹಾನನು, ‘‘ದೇವರು ಏನು ಕೊಡುತ್ತಾನೊ
ಅದನ್ನು ಮಾತ್ರ ಒಬ್ಬನು ಪಡೆದುಕೊಳ್ಳಬಲ್ಲನು. 28‘‘ನಾನು
ಕ್ರಿಸ್ತನಲ್ಲ. ಆತನಿಗಾಗಿ ಹಾದಿಯನ್ನು ಸಿದ್ಧಪಡಿಸುವುದಕ್ಕಾಗಿ
ಮಾತ್ರ ಕಳುಹಿಸಲ್ಪಟ್ಟಿದ್ದೇನೆ’ ಎಂದು ನಾನು ಹೇಳಿದ್ದಕ್ಕೆ ನೀವೇ
ಸಾಕ್ಷಿಗಳಾಗಿದ್ದೀರಿ. 29ಮದುಮಗಳು ಮದುಮಗನಿಗೆ ಮಾತ್ರ
ಸೇರಿದವಳಾಗಿದ್ದಾಳೆ. ಮದುಮಗನಿಗೆ ಸಹಾಯ ಮಾಡುವ
ಸ್ನೇಹಿತನು ಮದುಮಗನ ಬರುವಿಕೆಗಾಗಿ ಕಾಯುತ್ತಿರುತ್ತಾನೆ
ಮತ್ತು ಆತನ ಕರೆಗಾಗಿ ಆಲಿಸುತ್ತಿರುತ್ತಾನೆ. ಮದುಮಗನ
ಸ್ವರವನ್ನು ಕೇಳುವಾಗ ಈ ಸ್ನೇಹಿತನು ಬಹು ಸಂತೋಷ
ಪಡುವನು. ಅದೇ ಸಂತೋಷ ನನಗಿದೆ. ನನ್ನ ಪೂರ್ಣಾನಂದದ
ಸಮಯವು ಇದೇ ಆಗಿದೆ. 30ಆತನು (ಯೇಸು) ವೃದ್ಧಿಯಾಗ
ಬೇಕು ಮತ್ತು ನಾನು ಕಡಿಮೆಯಾಗಬೇಕು.

## ಪರಲೋಕದಿಂದ ಬರುವ ವ್ಯಕ್ತಿ

31‘‘ಮೇಲಿನಿಂದ ಬರುವ ಒಬ್ಬನು (ಯೇಸು) ಬೇರೆಲ್ಲಾ
ಜನರಿಗಿಂತಲೂ ದೊಡ್ಡವನಾಗಿದ್ದಾನೆ. ಈ ಲೋಕದ ವ್ಯಕ್ತಿಯು
ಈ ಲೋಕಕ್ಕೆ ಸೇರಿದವನಾಗಿದ್ದಾನೆ. ಅವನು ಈ ಲೋಕದಲ್ಲಿನ

ಸಂಗತಿಗಳ ಬಗ್ಗೆ ಮಾತಾಡುತ್ತಾನೆ. ಆದರೆ ಪರಲೋಕದಿಂದ ಬರುವ ಒಬ್ಬನು (ಯೇಸು) ಬೇರೆಲ್ಲಾ ಜನರಿಗಿಂತಲೂ ದೊಡ್ಡವನಾಗಿದ್ದಾನೆ. [32]ಆತನು ತಾನು ಕಂಡಿರುವುದರ ಬಗ್ಗೆ ಮತ್ತು ಕೇಳಿರುವುದರ ಬಗ್ಗೆ ಸಾಕ್ಷಿ ನೀಡುತ್ತಾನೆ. ಆದರೆ ಆತನ ಸಾಕ್ಷಿಯನ್ನು ಜನರು ಸ್ವೀಕರಿಸಿಕೊಳ್ಳುವುದಿಲ್ಲ. [33]ಆತನ ಸಾಕ್ಷಿಯನ್ನು ಸ್ವೀಕರಿಸಿಕೊಳ್ಳುವ ವ್ಯಕ್ತಿಯು ದೇವರೇ ಸತ್ಯವಂತನೆಂದು ನಿರೂಪಿಸುತ್ತಾನೆ. [34]ದೇವರು ಆತನನ್ನು (ಯೇಸುವನ್ನು) ಕಳುಹಿಸಿದನು. ದೇವರು ಹೇಳುವ ಸಂಗತಿಗಳನ್ನು ಆತನು ಹೇಳುತ್ತಾನೆ. ಏಕೆಂದರೆ ದೇವರು ಆತನಿಗೆ ಆತ್ಮನನ್ನು ಅಮಿತವಾಗಿ ಕೊಡುತ್ತಾನೆ. [35]ತಂದೆಯು ಮಗನನ್ನು ಪ್ರೀತಿಸುತ್ತಾನೆ. ತಂದೆಯು ಮಗನಿಗೆ ಪ್ರತಿಯೊಂದರ ಮೇಲೆಯೂ ಅಧಿಕಾರವನ್ನು ಕೊಟ್ಟಿದ್ದಾನೆ. [36]ಮಗನಲ್ಲಿ ನಂಬಿಕೆ ಇಡುವವನು ನಿತ್ಯಜೀವವನ್ನು ಹೊಂದಿದ್ದಾನೆ. ಆದರೆ ಮಗನಿಗೆ ವಿಧೇಯನಾಗದವನು ಆ ಜೀವವನ್ನು ಎಂದಿಗೂ ಹೊಂದಿಕೊಳ್ಳುವುದಿಲ್ಲ. ದೇವರ ಕೋಪವು ಅವನ ಮೇಲೆ ನೆಲೆಗೊಂಡಿರುವುದು'' ಎಂದು ಉತ್ತರಕೊಟ್ಟನು.

### ಯೇಸು ಮತ್ತು ಸಮಾರ್ಯ ಸ್ತ್ರೀಯ ಸಂಭಾಷಣೆ

4 ತಾನು ಯೋಹಾನನಿಗಿಂತಲೂ ಹೆಚ್ಚು ಶಿಷ್ಯರನ್ನು ಮಾಡಿಕೊಂಡು ಅವರಿಗೆ ದೀಕ್ಷಾಸ್ನಾನ ಮಾಡಿಸುತ್ತಿರುವ ಸುದ್ದಿಯು ಫರಿಸಾಯರಿಗೆ ತಿಳಿಯಿತೆಂಬುದು ಯೇಸುವಿಗೆ ಗೊತ್ತಾಯಿತು. [2](ವಾಸ್ತವವಾಗಿ ಜನರಿಗೆ ದೀಕ್ಷಾಸ್ನಾನ ಕೊಟ್ಟದ್ದು ಯೇಸುವಲ್ಲ. ಆತನ ಶಿಷ್ಯರೇ ಜನರಿಗೆ ದೀಕ್ಷಾಸ್ನಾನ ಮಾಡಿಸಿದರು.) [3]ಆಗ, ಆತನು ಜುದೇಯವನ್ನು ಬಿಟ್ಟು ಮತ್ತೆ ಗಲಿಲೇಯಕ್ಕೆ ಹೋದನು. [4]ಸಮಾರ್ಯ ಪ್ರಾಂತ್ಯದ ಮೂಲಕವೇ ಗಲಿಲೇಯಕ್ಕೆ ಹೋಗಬೇಕಿತ್ತು.

[5]ಯೇಸು ಸಮಾರ್ಯದ ಪಟ್ಟಣವಾದ ಸಿಖಾರ್ ಎಂಬಲ್ಲಿಗೆ ಬಂದನು. ಯಾಕೋಬನು ತನ್ನ ಮಗನಾದ ಯೋಸೇಫನಿಗೆ ಕೊಟ್ಟ ಭೂಮಿಯ ಸಮೀಪದಲ್ಲಿ ಆ ಊರಿದೆ. [6]ಯಾಕೋಬನ ಬಾವಿಯು ಅಲ್ಲಿತ್ತು. ಯೇಸು ತನ್ನ ದೀರ್ಘ ಪ್ರಯಾಣದಿಂದ ಆಯಾಸಗೊಂಡಿದ್ದನು. ಆದ್ದರಿಂದ ಆತನು ಬಾವಿಯ ಬಳಿ ಕುಳಿತುಕೊಂಡನು. ಆಗ ಸುಮಾರು ಮಧ್ಯಾಹ್ನದ ಸಮಯವಾಗಿತ್ತು.

[7]ಸಮಾರ್ಯದ ಸ್ತ್ರೀಯೊಬ್ಬಳು ನೀರನ್ನು ತೆಗೆದುಕೊಂಡು ಹೋಗುವುದಕ್ಕಾಗಿ ಆ ಬಾವಿಗೆ ಬಂದಳು. ಯೇಸು ಆಕೆಗೆ, ''ದಯವಿಟ್ಟು, ಕುಡಿಯಲು ಸ್ವಲ್ಪ ನೀರು ಕೊಡು'' ಎಂದು ಕೇಳಿದನು. [8](ಯೇಸುವಿನ ಶಿಷ್ಯರು ಆಹಾರ ಪದಾರ್ಥವನ್ನು ಕೊಂಡುಕೊಂಡು ಬರಲು ಪಟ್ಟಣದೊಳಗೆ ಹೋಗಿದ್ದಾಗ ಇದು ಸಂಭವಿಸಿತು.)

[9]ಸಮಾರ್ಯದ ಸ್ತ್ರೀಯು, ''ಕುಡಿಯುವ ನೀರಿಗಾಗಿ ನೀನು ನನ್ನನ್ನು ಕೇಳುತ್ತಿರುವುದು ನನಗೆ ಆಶ್ಚರ್ಯವನ್ನು ಉಂಟುಮಾಡಿದೆ! ನೀನಾದರೊ ಯೆಹೂದ್ಯನು. ನಾನಾದರೊ ಸಮಾರ್ಯದವಳು!'' ಎಂದು ಹೇಳಿದಳು. (ಯೆಹೂದ್ಯರು ಸಮಾರ್ಯದವರೊಂದಿಗೆ ಸ್ನೇಹದಿಂದಿರಲಿಲ್ಲ.)

[10]ಯೇಸು ಆಕೆಗೆ, ''ದೇವರು ಏನು ಕೊಡುತ್ತಾನೆಂಬುದು ನಿನಗೆ ಗೊತ್ತಿಲ್ಲ ಮತ್ತು ಕುಡಿಯಲು ನೀರನ್ನು ಕೇಳಿದ ನಾನು ಯಾರೆಂಬುದೂ ನಿನಗೆ ಗೊತ್ತಿಲ್ಲ. ನಿನಗೆ ಈ ಸಂಗತಿಗಳು ಗೊತ್ತಿದ್ದರೆ, ನೀನು ನನ್ನನ್ನು ಕೇಳಿಕೊಳ್ಳುತ್ತಿದ್ದೆ. ಮತ್ತು ನಾನು ನಿನಗೆ ಜೀವಜಲವನ್ನು ಕೊಡುತ್ತಿದ್ದೆ'' ಎಂದನು.

[11]ಆ ಸ್ತ್ರೀಯು, ''ಅಯ್ಯಾ, ಆ ಜೀವಜಲ ನಿನಗೆಲ್ಲಿ ಸಿಕ್ಕುವುದು? ಬಾವಿಯು ಬಹು ಆಳವಾಗಿದೆ ಮತ್ತು ನೀರು ಸೇದುವುದಕ್ಕೆ ನಿನ್ನಲ್ಲಿ ಏನೂ ಇಲ್ಲ. [12]ನಮ್ಮ ಪಿತೃವಾದ ಯಾಕೋಬನಿಗಿಂತಲೂ ನೀನು ದೊಡ್ಡವನೋ? ನಮಗೆ ಈ ಬಾವಿಯನ್ನು ಯಾಕೋಬನೇ ಕೊಟ್ಟನು. ಸ್ವತಃ ಅವನೇ ಈ ನೀರನ್ನು ಕುಡಿದನು. ಅಲ್ಲದೆ ಅವನ ಮಕ್ಕಳು ಈ ಬಾವಿಯ ನೀರನ್ನು ಕುಡಿದರು ಮತ್ತು ಅವನ ಪಶುಗಳೆಲ್ಲಾ ಈ ಬಾವಿಯ ನೀರನ್ನು ಕುಡಿದವು'' ಎಂದು ಹೇಳಿದಳು.

[13]ಯೇಸು, ''ಈ ನೀರನ್ನು ಕುಡಿಯುವ ಪ್ರತಿಯೊಬ್ಬನಿಗೂ ಮತ್ತೆ ದಾಹವಾಗುವುದು. [14]ಆದರೆ ನಾನು ಕೊಡುವ ನೀರನ್ನು ಕುಡಿಯುವವನಿಗೆ ದಾಹವಾಗುವುದೇ ಇಲ್ಲ. ನಾನು ಅವನಿಗೆ ಕೊಡುವ ನೀರು ಅವನೊಳಗೆ ಉಕ್ಕಿ ಹರಿಯುವ ನೀರಿನ ಬುಗ್ಗೆಯಾಗುವುದು. ಆ ನೀರು ಅವನಿಗೆ ನಿತ್ಯಜೀವವನ್ನು ತರುತ್ತದೆ'' ಎಂದು ಉತ್ತರಕೊಟ್ಟನು. [15]ಆ ಸ್ತ್ರೀಯು ಯೇಸುವಿಗೆ, ''ಅಯ್ಯಾ, ಆ ನೀರನ್ನು ನನಗೆ ಕೊಡು. ಆಗ ನನಗೆ ಮತ್ತೆಂದಿಗೂ ದಾಹವಾಗುವುದಿಲ್ಲ. ನೀರನ್ನು ತೆಗೆದುಕೊಂಡು ಹೋಗುವುದಕ್ಕಾಗಿ ನಾನು ಇಲ್ಲಿಗೆ ಮತ್ತೆ ಬರುವ ಅಗತ್ಯವೂ ಇರುವುದಿಲ್ಲ'' ಎಂದು ಹೇಳಿದಳು.

[16]ಯೇಸು ಆಕೆಗೆ, ''ಹೋಗಿ ನಿನ್ನ ಗಂಡನನ್ನು ಕರೆದುಕೊಂಡು ಬಾ'' ಎಂದನು.

[17]ಆ ಸ್ತ್ರೀಯು, ''ನನಗೆ ಗಂಡನಿಲ್ಲ'' ಎಂದು ಹೇಳಿದಳು. ಯೇಸು ಆಕೆಗೆ, ''ಗಂಡನಿಲ್ಲವೆಂದು ಸರಿಯಾಗಿ ಹೇಳಿದೆ. [18]ನಿಜವಾಗಿಯೂ ನಿನಗೆ ಐದು ಮಂದಿ ಗಂಡಂದಿರಿದ್ದರು. ಆದರೆ ಈಗ ನೀನು ಯಾರೊಂದಿಗೆ ವಾಸಿಸುತ್ತಿರುವಿಯೋ ಅವನು ನಿನ್ನ ಗಂಡನಲ್ಲ. ನೀನು ನನಗೆ ಸತ್ಯವನ್ನು ತಿಳಿಸಿದೆ'' ಎಂದು ಹೇಳಿದನು. [19] ಆ ಸ್ತ್ರೀಯು, ''ಅಯ್ಯಾ, ನೀನು ಪ್ರವಾದಿಯೆಂದು ಕಾಣುತ್ತದೆ. [20]ನಮ್ಮ ಪಿತೃಗಳು ಈ ಗುಡ್ಡದ ಮೇಲೆ ಆರಾಧಿಸಿದರು. ಆದರೆ ಜನರು ಆರಾಧಿಸಬೇಕಾದ ಸ್ಥಳ ಜೆರುಸಲೇಮ್ ಎಂದು ಯೆಹೂದ್ಯರಾದ ನೀವು ಹೇಳುತ್ತೀರಲ್ಲಾ'' ಎಂದಳು.

[21]ಯೇಸು, ''ಅಮ್ಮಾ, ನನ್ನನ್ನು ನಂಬು! ನೀವು ಇನ್ನೆಂದಿಗೂ ತಂದೆಯನ್ನು (ದೇವರನ್ನು) ಜೆರುಸಲೇಮಿನಲ್ಲಾಗಲಿ ಈ ಗುಡ್ಡದ ಮೇಲಾಗಲಿ ಆರಾಧಿಸಬೇಕಿಲ್ಲ. [22]ನೀವು ನಿಮಗೆ ತಿಳಿದಿಲ್ಲದ ಯಾವುದನ್ನೋ ಆರಾಧಿಸುತ್ತೀರಿ. ನಮಗಾದರೋ ನಾವು ಯಾರನ್ನು ಆರಾಧಿಸುತ್ತಿದ್ದೇವೆ ಎಂಬುದು ತಿಳಿದಿದೆ. ರಕ್ಷಣೆಯು ಯೆಹೂದ್ಯರಿಂದ ಬರುತ್ತದೆ. [23]ನಿಜವಾದ ಆರಾಧಕರು ತಂದೆಯ ಚಿತ್ತಕ್ಕನುಸಾರವಾಗಿ ತಂದೆಯನ್ನು ಆತ್ಮದಿಂದಲೂ ಸತ್ಯದಿಂದಲೂ ಆರಾಧಿಸುವ ಕಾಲ ಬರುತ್ತದೆ. ಆ ಕಾಲ ಈಗಲೇ ಬಂದಿದೆ ಮತ್ತು ಅಂಥ ಜನರೇ ತನ್ನ ಆರಾಧಕರಾಗಿರಬೇಕೆಂದು ತಂದೆಯು ಬಯಸುತ್ತಾನೆ. [24]ದೇವರು ಆತ್ಮಸ್ವರೂಪಿ. ಆದ್ದರಿಂದ ದೇವರನ್ನು ಆರಾಧಿಸುವವರು ಆತ್ಮದಿಂದಲೂ ಸತ್ಯದಿಂದಲೂ ಆರಾಧಿಸಬೇಕು'' ಎಂದು ಹೇಳಿದನು.

[25]ಆ ಸ್ತ್ರೀಯು, ''ಮೆಸ್ಸೀಯನು ಬರುತ್ತಾನೆಂದು ನನಗೆ ಗೊತ್ತು. ಆತನು ಬಂದಾಗ ನಮಗೆ ಪ್ರತಿಯೊಂದನ್ನೂ

ವಿವರಿಸುವನು'' ಎಂದು ಹೇಳಿದಳು. (''ಮೆಸ್ಸೀಯನು''ಅಂದರೆ
''ಕ್ರಿಸ್ತನು.'') 26ಆಗ ಯೇಸು, ''ಆತನೇ ಈಗ ನಿನ್ನೊಂದಿಗೆ
ಮಾತಾಡುತ್ತಿದ್ದಾನೆ. ನಾನೇ ಮೆಸ್ಸೀಯ'' ಎಂದು ಹೇಳಿದನು.

27ಆ ಸಮಯದಲ್ಲಿ ಆತನ ಶಿಷ್ಯರು ಹಿಂತಿರುಗಿ ಬಂದರು.
ಯೇಸು ಒಬ್ಬ ಸ್ತ್ರೀಯೊಂದಿಗೆ ಮಾತಾಡುತ್ತಿರುವುದನ್ನು ನೋಡಿ
ಅವರು ಆಶ್ಚರ್ಯಗೊಂಡರು. ಆದರೆ, ''ನಿನಗೇನು ಬೇಕು?''
ಎಂದಾಗಲಿ ''ನೀನು ಆಕೆಯೊಂದಿಗೆ ಏಕೆ ಮಾತಾಡುತ್ತಿರುವೆ?''
ಎಂದಾಗಲಿ ಅವರಲ್ಲಿ ಒಬ್ಬರೂ ಕೇಳಲಿಲ್ಲ.

28ಬಳಿಕ ಆ ಸ್ತ್ರೀಯು, ತನ್ನ ಕೊಡವನ್ನು ಅಲ್ಲಿಯೇ ಬಿಟ್ಟು
ಊರಿಗೆ ಹಿಂತಿರುಗಿ ಹೋಗಿ ಜನರಿಗೆ, 29''ನಾನು ಈವರೆಗೆ
ಮಾಡಿರುವ ಪ್ರತಿಯೊಂದನ್ನೂ ಒಬ್ಬ ವ್ಯಕ್ತಿ ನನಗೆ ತಿಳಿಸಿದನು.
ಬಂದು ಅವನನ್ನು ನೋಡಿರಿ. ಆತನೇ ಕ್ರಿಸ್ತನಿರಬಹುದು''
ಎಂದು ಹೇಳಿದಳು. 30ಆದ್ದರಿಂದ ಜನರು ಆತನನ್ನು ನೋಡಲು
ಪಟ್ಟಣದಿಂದ ಹೊರಬಂದರು.

31ಅಷ್ಟರಲ್ಲಿ ಯೇಸುವಿನ ಶಿಷ್ಯರು, ''ಗುರುವೇ, ಊಟ
ಮಾಡಿ'' ಎಂದು ಆತನನ್ನು ಒತ್ತಾಯ ಮಾಡಿದರು.

32ಅದಕ್ಕೆ ಯೇಸು, ''ನನ್ನಲ್ಲಿ ಆಹಾರವಿದೆ. ಆ ಆಹಾರದ
ಬಗ್ಗೆ ನಿಮಗೇನೂ ಗೊತ್ತಿಲ್ಲ'' ಎಂದನು.

33ಆದ್ದರಿಂದ ಶಿಷ್ಯರು, ''ಯಾರಾದರೂ ಆತನಿಗೆ ಮೊದಲೇ
ಆಹಾರವನ್ನು ತಂದುಕೊಟ್ಟರೇ? ಎಂದು ತಮ್ಮತಮ್ಮೊಳಗೆ
ಕೇಳತೊಡಗಿದರು. 34ಯೇಸು, ''ನನ್ನನ್ನು ಕಳುಹಿಸಿದಾತನು
(ದೇವರು) ನಾನು ಏನು ಮಾಡಬೇಕೆಂದು ಬಯಸುವನೋ
ಅದನ್ನು ಮಾಡುವುದೇ ನನಗೆ ಆಹಾರವಾಗಿದೆ. ಆತನು ನನಗೆ
ಕೊಟ್ಟಿರುವ ಕೆಲಸವನ್ನು ಪೂರೈಸುವುದೇ ನನಗೆ ಆಹಾರವಾಗಿದೆ.
35'ಸುಗ್ಗಿಗೆ ಇನ್ನೂ ನಾಲ್ಕು ತಿಂಗಳು ಕಾಯಬೇಕು' ಎಂದು ನೀವು
ಹೇಳುವಿರಿ. ಆದರೆ ನಾನು ನಿಮಗೆ ಹೇಳುತ್ತೇನೆ, ನಿಮ್ಮ
ಕಣ್ಣುಗಳನ್ನು ತೆರೆಯಿರಿ. ಹೊಲಗಳ ಸುತ್ತಲ್ಲೆಲ್ಲಾ ನೋಡಿರಿ,
ಅವು ಕೊಯ್ಲಿಗೆ ಬಂದಿವೆ. 36ಈಗಲೂ ಸಹ, ಬೆಳೆಯನ್ನು
ಕೊಯ್ಯುವವನಿಗೆ ಕೂಲಿ ದೊರೆಯುತ್ತದೆ. ಅವನು ಬೆಳೆಗಳನ್ನು
ನಿತ್ಯಜೀವಕ್ಕಾಗಿ ಕೂಡಿಸುತ್ತಿದ್ದಾನೆ. ಆದ್ದರಿಂದ ಈಗ
ಬಿತ್ತುವವರೂ ಮತ್ತು ಕೊಯ್ಯುವವರೂ ಒಟ್ಟಿಗೆ ಸಂತೋಷ
ವಾಗಿರುವರು. 37'ಒಬ್ಬನು ಬಿತ್ತುತ್ತಾನೆ, ಆದರೆ ಮತ್ತೊಬ್ಬನು
ಬೆಳೆಯನ್ನು ಕೊಯ್ಯುತ್ತಾನೆ' ಎಂದು ನಾವು ಹೇಳುವ ನಾಣ್ಣುಡಿ
ಸತ್ಯವಾದದ್ದು. 38ನೀವು ದುಡಿದಿಲ್ಲದ ಬೆಳೆಯನ್ನು ಕೊಯ್ಯುವು
ದಕ್ಕಾಗಿ ನಾನು ನಿಮ್ಮನ್ನು ಕಳುಹಿಸುತ್ತಿದ್ದೇನೆ. ಬೇರೆಯವರು
ದುಡಿದರು, ಆದರೆ ಅವರ ದುಡಿಮೆಯಿಂದ ನೀವು ಲಾಭವನ್ನು
ಪಡೆಯುತ್ತೀರಿ'' ಎಂದು ಹೇಳಿದನು.

39ಆ ಸಮಾರ್ಯ ಪಟ್ಟಣದ ಜನರಲ್ಲಿ ಅನೇಕರು
ಯೇಸುವನ್ನು ನಂಬಿದರು. ಏಕೆಂದರೆ ಆ ಸ್ತ್ರೀಯು ಆತನ
ವಿಷಯವಾಗಿ ಅವರಿಗೆ, ''ನಾನು ಮಾಡಿರುವ ಪ್ರತಿಯೊಂದನ್ನೂ
ಆತನು (ಯೇಸು) ನನಗೆ ತಿಳಿಸಿದನು'' ಎಂದು ಹೇಳಿದ್ದಳು.
40ಸಮಾರ್ಯದವರು ಯೇಸುವಿನ ಬಳಿಗೆ ಹೋಗಿ ತಮ್ಮೊಂದಿಗೆ
ಇರಬೇಕೆಂದು ಆತನನ್ನು ಬೇಡಿಕೊಂಡರು. ಆದ್ದರಿಂದ ಆತನು
ಅಲ್ಲಿ ಎರಡು ದಿನ ಇದ್ದನು. 41ಆತನು ಹೇಳಿದ ಸಂಗತಿಗಳನ್ನು
ಕೇಳಿ ಇನ್ನೂ ಅನೇಕ ಜನರು ನಂಬಿದರು. 42ಅವರು ಆ ಸ್ತ್ರೀಗೆ,
''ನಾವು ಮೊದಲು ನಿನ್ನ ಮಾತನ್ನು ಕೇಳಿ ಯೇಸುವನ್ನು
ನಂಬಿದೆವು. ಆದರೆ ಈಗ ಸ್ವತಃ ನಾವೇ ಆತನ ಮಾತನ್ನು ಕೇಳಿದ್ದ
ರಿಂದ ನಂಬುತ್ತೇವೆ. ನಿಜವಾಗಿಯೂ ಈತನೇ ಲೋಕ
ರಕ್ಷಕನೆಂದು ಈಗ ನಮಗೆ ತಿಳಿದಿದೆ'' ಎಂದು ಹೇಳಿದರು.

### ಗುಣಹೊಂದಿದ ಅಧಿಕಾರಿಯ ಮಗ

(ಮತ್ತಾಯ 8:5-13; ಲೂಕ 7:1-10)

43ಎರಡು ದಿನಗಳಾದ ನಂತರ ಯೇಸು ಅಲ್ಲಿಂದ
ಗಲಿಲೇಯಕ್ಕೆ ಹೋದನು. 44(ಪ್ರವಾದಿಗೆ ಸ್ವಂತ ಊರಿನಲ್ಲಿ
ಗೌರವವಿಲ್ಲವೆಂದು ಸ್ವತಃ ಯೇಸುವೇ ತಿಳಿಸಿದ್ದನು.) 45ಆತನು
ಗಲಿಲೇಯವನ್ನು ತಲುಪಿದಾಗ, ಅಲ್ಲಿಯ ಜನರು ಆತನನ್ನು
ಸ್ವಾಗತಿಸಿದರು. ಈ ಜನರು ಪಸ್ಕಹಬ್ಬಕ್ಕಾಗಿ ಜೆರುಸಲೇಮಿಗೆ
ಹೋಗಿದ್ದಾಗ ಹಬ್ಬದ ಸಮಯದಲ್ಲಿ ಆತನು ಮಾಡಿದ
ಕಾರ್ಯಗಳನ್ನೆಲ್ಲಾ ನೋಡಿದ್ದರು.

46ಯೇಸು ಗಲಿಲೇಯದ ಕಾನಾ ಊರಿಗೆ ಮತ್ತೊಮ್ಮೆ
ಭೇಟಿ ನೀಡಿದನು. ಆತನು ನೀರನ್ನು ದ್ರಾಕ್ಷಾರಸವನ್ನಾಗಿ
ಮಾರ್ಪಡಿಸಿದ್ದು ಆ ಊರಿನಲ್ಲೇ. ರಾಜನ ಒಬ್ಬ ಅಧಿಕಾರಿಯು
ಕಪೆರ್ನೌಮ್ ಪಟ್ಟಣದಲ್ಲಿ ವಾಸವಾಗಿದ್ದನು. ಅವನ ಮಗನಿಗೆ
ಕಾಯಿಲೆಯಾಗಿತ್ತು. 47ಯೇಸು ಜುದೇಯದಿಂದ ಬಂದು ಈಗ
ಗಲಿಲೇಯದಲ್ಲಿ ಇದ್ದಾನೆ ಎಂಬ ಸುದ್ದಿಯನ್ನು ಅವನು
ಕೇಳಿದನು. ಆದ್ದರಿಂದ ಅವನು ಆತನ ಬಳಿಗೆ ಹೋಗಿ ತನ್ನ
ಮಗನನ್ನು ಗುಣಪಡಿಸುವುದಕ್ಕಾಗಿ ಕಪೆರ್ನೌಮ್‌ಗೆ ಬರ
ಬೇಕೆಂದು ಆತನನ್ನು ಬೇಡಿಕೊಂಡನು. ಅವನ ಮಗನು
ಸಾಯುವ ಸ್ಥಿತಿಯಲ್ಲಿದ್ದನು. 48ಯೇಸು ಅವನಿಗೆ, ''ನೀವು
ಸೂಚಕಕಾರ್ಯಗಳನ್ನು ಮತ್ತು ಆಶ್ಚರ್ಯಕರವಾದ ಕಾರ್ಯ
ಗಳನ್ನು ನೋಡದ ಹೊರತು ನನ್ನನ್ನು ನಂಬುವುದೇ ಇಲ್ಲ''
ಎಂದು ಹೇಳಿದನು.

49ರಾಜನ ಅಧಿಕಾರಿ, ''ಸ್ವಾಮೀ, ನನ್ನ ಮಗನು ಸಾಯುವ
ಮೊದಲೇ ನೀನು ಬರಬೇಕು'' ಎಂದು ಕೇಳಿಕೊಂಡನು.

50ಯೇಸು ಅವನಿಗೆ, ''ಹೋಗು, ನಿನ್ನ ಮಗನು
ಬದುಕುವನು'' ಎಂದು ಉತ್ತರಕೊಟ್ಟನು.

ಯೇಸುವಿನ ಮಾತನ್ನು ಅವನು ನಂಬಿ ಮನೆಗೆ
ಹಿಂತಿರುಗಿದನು. 51ಅವನು ಮನೆಗೆ ಹೋಗುತ್ತಿರುವಾಗ ಅವನ
ಸೇವಕರುಗಳು ಬಂದು ಅವನನ್ನು ಭೇಟಿಯಾಗಿ, ''ನಿನ್ನ ಮಗನು
ಗುಣಹೊಂದಿದನು'' ಎಂದು ತಿಳಿಸಿದರು.

52ಅವನು, ''ನನ್ನ ಮಗನಿಗೆ ಯಾವಾಗ ಗುಣವಾಯಿತು?''
ಎಂದು ಕೇಳಿದನು.

ಸೇವಕರುಗಳು, ''ನಿನ್ನೆ ಮಧ್ಯಾಹ್ನ ಸುಮಾರು ಒಂದು
ಗಂಟೆಯಲ್ಲಿ ಅವನ ಜ್ವರವು ಬಿಟ್ಟಿತು'' ಎಂದು ಉತ್ತರಕೊಟ್ಟರು.

53''ನಿನ್ನ ಮಗನು ಬದುಕುವನು'' ಎಂದು ಯೇಸು
ಹೇಳಿದ್ದು ಇದೇ ಹೊತ್ತಿನಲ್ಲಿ ಎಂಬುದು ತಂದೆಗೆ ತಿಳಿದಿತ್ತು.
ಆದ್ದರಿಂದ ಅವನು ಮತ್ತು ಅವನ ಮನೆಯವರೆಲ್ಲ ಯೇಸುವನ್ನು
ನಂಬಿದರು. 54ಯೇಸು ಜುದೇಯದಿಂದ ಗಲಿಲೇಯಕ್ಕೆ ಬಂದ
ಮೇಲೆ ಮಾಡಿದ ಎರಡನೆಯ ಸೂಚಕಕಾರ್ಯವಿದು.

### ಕೊಳದ ಬಳಿ ಗುಣಹೊಂದಿದ ರೋಗಿ

5 ತರುವಾಯ ಯೇಸು ಯೆಹೂದ್ಯರ ಒಂದು ಹಬ್ಬಕ್ಕಾಗಿ
ಜೆರುಸಲೇಮಿಗೆ ಹೋದನು. 2ಜೆರುಸಲೇಮಿನಲ್ಲಿ ಐದು
ಮಂಟಪಗಳಿಂದ ಕೂಡಿದ ಒಂದು ಕೊಳವಿದೆ. ಯೆಹೂದ್ಯರ

ಭಾಷೆಯಲ್ಲಿ ಅದಕ್ಕೆ ‘ಬೆತ್ಸಥ’ ಎಂದು ಕರೆಯುತ್ತಾರೆ. ಈ
ಕೊಳವು ‘ಕುರಿಬಾಗಿಲು’ ಎಂಬ ಸ್ಥಳದ ಸಮೀಪದಲ್ಲಿದೆ.
3ಕೊಳದ ಬಳಿಯಲ್ಲಿದ್ದ ಮಂಟಪಗಳಲ್ಲಿ ಅನೇಕ ರೋಗಿಗಳು
ಬಿದ್ದುಕೊಂಡಿರುತ್ತಿದ್ದರು. ಅವರಲ್ಲಿ ಕೆಲವರು ಕುರುಡ
ರಾಗಿದ್ದರು, ಕೆಲವರು ಕುಂಟರಾಗಿದ್ದರು, ಮತ್ತೆ ಕೆಲವರು,
ಪಾರ್ಶ್ವವಾಯು ರೋಗಿಗಳಾಗಿದ್ದರು. 4*-5ಮೂವತ್ತೆಂಟು
ವರ್ಷಗಳಿಂದ ರೋಗಿಯಾಗಿದ್ದ ಒಬ್ಬನು ಅಲ್ಲಿ ಬಿದ್ದು
ಕೊಂಡಿದ್ದನು. 6ಯೇಸು ಅವನನ್ನು ನೋಡಿದನು. ಅವನು
ಬಹುಕಾಲದಿಂದ ರೋಗಿಯಾಗಿರುವುದು ಆತನಿಗೆ ಗೊತ್ತಿತ್ತು.
ಆದ್ದರಿಂದ ಆತನು ಅವನಿಗೆ, ‘‘ಗುಣಹೊಂದಲು ನಿನಗೆ ಅಪೇಕ್ಷೆ
ಇದೆಯಾ?’’ ಎಂದು ಕೇಳಿದನು.

7ಆ ರೋಗಿಯು, ‘‘ಅಯ್ಯಾ, ನೀರು ಉಕ್ಕುವಾಗ
ಕೊಳದೊಳಗೆ ಇಳಿದುಹೋಗಲು ನನಗೆ ಯಾರೂ ಸಹಾಯ
ಮಾಡುವುದಿಲ್ಲ. ನಾನು ಎಲ್ಲರಿಗಿಂತ ಮೊದಲೇ ನೀರಿಗೆ ಇಳಿ
ಯಲು ಪ್ರಯತ್ನಿಸುವೆ. ಆದರೆ ಪ್ರತಿಸಲವು ನನಗಿಂತ ಮೊದಲೇ
ಮತ್ತೊಬ್ಬನು ಇಳಿದುಬಿಡುತ್ತಾನೆ’’ ಎಂದು ಹೇಳಿದನು.

8ಆಗ ಯೇಸು, ‘‘ಎದ್ದುನಿಲ್ಲು! ನಿನ್ನ ಹಾಸಿಗೆಯನ್ನು
ಎತ್ತಿಕೊಂಡು ನಡೆ’’ ಎಂದು ಹೇಳಿದನು. 9 ಆ ಕ್ಷಣವೇ ಆ
ಮನುಷ್ಯನು ಗುಣಹೊಂದಿ, ತನ್ನ ಹಾಸಿಗೆಯನ್ನು ಎತ್ತಿಕೊಂಡು
ನಡೆದನು. ಇದೆಲ್ಲಾ ನಡೆದದ್ದು ಸಬ್ಬತ್‌ದಿನದಲ್ಲಿ. 10ಆದ್ದರಿಂದ
ಯೆಹೂದ್ಯರು ಗುಣಹೊಂದಿದ ಆ ವ್ಯಕ್ತಿಗೆ, ‘‘ಇಂದು ಸಬ್ಬತ್
ದಿನ. ನೀನು ಸಬ್ಬತ್‌ದಿನದಲ್ಲಿ* ಹಾಸಿಗೆಯನ್ನು ಹೊತ್ತು
ಕೊಂಡು ಹೋಗುವುದು ನಮ್ಮ ಧರ್ಮಶಾಸ್ತ್ರಕ್ಕೆ ವಿರುದ್ಧ
ವಾದದ್ದು’’ ಎಂದರು.

11ಅದಕ್ಕೆ ಅವನು, ‘‘ನನ್ನನ್ನು ಗುಣಪಡಿಸಿದವನೇ, ‘ನಿನ್ನ
ಹಾಸಿಗೆಯನ್ನು ಎತ್ತಿಕೊಂಡು ನಡೆ’ ಎಂದು ಹೇಳಿದನು’’
ಎಂಬುದಾಗಿ ಉತ್ತರಿಸಿದನು.

12ಅದಕ್ಕೆ ಅವರು, ‘‘ನಿನ್ನ ಹಾಸಿಗೆಯನ್ನು ಎತ್ತಿಕೊಂಡು
ನಡೆಯಲು ನಿನಗೆ ಹೇಳಿದವನು ಯಾರು?’’ ಎಂದು ಕೇಳಿದರು.

13ಆದರೆ ಗುಣಹೊಂದಿದ್ದ ವ್ಯಕ್ತಿಗೆ ತನ್ನನ್ನು ಗುಣಪಡಿಸಿ
ದವನು ಯಾರೆಂಬುದು ಗೊತ್ತಿರಲಿಲ್ಲ. ಆ ಸ್ಥಳದಲ್ಲಿ ಅನೇಕ
ಜನರಿದ್ದರು. ಯೇಸು ಆ ಸ್ಥಳದಿಂದ ನುಸುಳಿಕೊಂಡು ಹೊರಟು
ಹೋದನು.

14ಅನಂತರ ಯೇಸು ಆ ಮನುಷ್ಯನನ್ನು ದೇವಾಲಯದಲ್ಲಿ
ಕಂಡು ಅವನಿಗೆ, ‘‘ನೋಡು, ಈಗ ನೀನು ಗುಣಹೊಂದಿರುವೆ.
ಆದರೆ ಪಾಪ ಮಾಡುವುದನ್ನು ಬಿಟ್ಟುಬಿಡು. ಇಲ್ಲದಿದ್ದರೆ ಹೆಚ್ಚಿನ
ಕೇಡು ನಿನಗೆ ಸಂಭವಿಸಬಹುದು!’’ ಎಂದು ಹೇಳಿದನು.

15ಆಗ ಆ ಮನುಷ್ಯನು ಆ ಯೆಹೂದ್ಯರ ಬಳಿಗೆ ಹೋಗಿ
ತನ್ನನ್ನು ಗುಣಪಡಿಸಿದವನು ಯೇಸುವೇ ಎಂದು ತಿಳಿಸಿದನು.

16ಯೇಸು ಈ ಕಾರ್ಯಗಳನ್ನು ಸಬ್ಬತ್ ದಿನದಲ್ಲಿ ಮಾಡು
ತ್ತಿದ್ದನು. ಈ ಕಾರಣದಿಂದಾಗಿ ಯೆಹೂದ್ಯರು ಯೇಸುವನ್ನು
ಹಿಂಸಿಸತೊಡಗಿದರು. 17ಆದರೆ ಯೇಸು ಅವರಿಗೆ, ‘‘ನನ್ನ
ತಂದೆಯು ತನ್ನ ಕಾರ್ಯವನ್ನು ಎಂದಿಗೂ ನಿಲ್ಲಿಸುವುದಿಲ್ಲ.
ಆದ್ದರಿಂದ ನಾನು ಸಹ ಕಾರ್ಯನಿರತನಾಗಿದ್ದೇನೆ’’ ಎಂದು
ತನ್ನನ್ನು ಪ್ರತಿಪಾದಿಸಿಕೊಂಡನು.

18ಯೇಸು ಸಬ್ಬತ್ತನ್ನು ಉಲ್ಲಂಘಿಸಿದ್ದಲ್ಲದೆ ದೇವರನ್ನು ತನ್ನ
ತಂದೆಯೆಂದು ಹೇಳಿಕೊಂಡು ತನ್ನನ್ನು ದೇವರಿಗೆ ಸರಿ
ಸಮಾನನ್ನಾಗಿ ಮಾಡಿಕೊಳ್ಳುತ್ತಿದ್ದಾನೆಂದು ಯೆಹೂದ್ಯರು
ಆತನನ್ನು ಕೊಲ್ಲಲು ಮತ್ತುಷ್ಟು ಪ್ರಯತ್ನಿಸಿದರು.

### ಯೇಸುವಿಗೆ ದೇವರ ಅಧಿಕಾರವಿದೆ

19ಅದಕ್ಕೆ ಉತ್ತರವಾಗಿ ಆತನು ಇಂತೆಂದನು: ‘‘ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ಮಗನು ತನ್ನಷ್ಟಕ್ಕೆ ತಾನೇ ಏನೂ
ಮಾಡಲಾರನು; ತಂದೆಯು ಮಾಡುವುದನ್ನು ಕಂಡು ತಾನೂ
ಹಾಗೆಯೇ ಮಾಡುತ್ತಾನೆ. ತಂದೆಯು ಮಾಡುವ ಕಾರ್ಯ
ಗಳನ್ನೇ ಮಗನೂ ಮಾಡುತ್ತಾನೆ. 20ತಂದೆಯು ಮಗನನ್ನು
ಪ್ರೀತಿಸುವನು ಮತ್ತು ತಾನು ಮಾಡುವ ಎಲ್ಲಾ ಕಾರ್ಯಗಳನ್ನು
ಮಗನಿಗೆ ತೋರಿಸುವನು. ಆದರೆ ಇದಕ್ಕಿಂತಲೂ ಹೆಚ್ಚಿನ
ಕಾರ್ಯಗಳನ್ನು ತಂದೆಯು ಮಗನಿಗೆ ತೋರಿಸುವನು. ಆಗ
ನೀವೆಲ್ಲರೂ ಆಶ್ಚರ್ಯಚಕಿತರಾಗುವಿರಿ. 21ತಂದೆಯು ಸತ್ತ
ವರನ್ನು ಎಬ್ಬಿಸಿ ಅವರಿಗೆ ಜೀವ ಕೊಡುತ್ತಾನೆ. ಅದೇ ರೀತಿಯಲ್ಲಿ
ಮಗನು ತಾನು ಬಯಸಿದವರಿಗೆ ಜೀವವನ್ನು ಕೊಡುತ್ತಾನೆ.
22ಇದಲ್ಲದೆ ತಂದೆಯು ಯಾರಿಗೂ ತೀರ್ಪು ಮಾಡುವುದಿಲ್ಲ.
ಆದರೆ ತಂದೆಯು ತೀರ್ಪು ಮಾಡುವ ಅಧಿಕಾರವನ್ನೆಲ್ಲಾ
ಮಗನಿಗೆ ಕೊಟ್ಟಿದ್ದಾನೆ. 23ಜನರು ತಂದೆಯನ್ನು ಗೌರವಿಸು
ವಂತೆ ಮಗನನ್ನು ಗೌರವಿಸಬೇಕೆಂದು ದೇವರು ಹೀಗೆ
ಮಾಡಿದನು. ಮಗನನ್ನು ಸನ್ಮಾನಿಸದವನು ಆತನನ್ನು ಕಳು
ಹಿಸಿರುವ ತಂದೆಯನ್ನೂ ಸನ್ಮಾನಿಸದವನಾಗಿದ್ದಾನೆ.

24‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನನ್ನ ಮಾತನ್ನು
ಕೇಳಿ ನನ್ನನ್ನು ಕಳುಹಿಸಿದಾತನನ್ನು ನಂಬುವವನು ನಿತ್ಯಜೀವ
ವನ್ನು ಹೊಂದಿದ್ದಾನೆ. ಅವನಿಗೆ ಅಪರಾಧಿಯೆಂಬ ತೀರ್ಪಾ
ಗುವುದಿಲ್ಲ. ಅವನು ಈಗಾಗಲೇ ಮರಣವನ್ನು ದಾಟಿ ಜೀವಕ್ಕೆ
ಪ್ರವೇಶಿಸಿದ್ದಾನೆ. 25ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಸತ್ತು
ಹೋದವರು ದೇವರ ಮಗನ ಸ್ವರವನ್ನು ಕೇಳುವ ಕಾಲ ಬರು
ತ್ತದೆ, ಅದು ಈಗಲೇ ಬಂದಿದೆ. ಕೇಳಿ ಸ್ವೀಕರಿಸಿಕೊಳ್ಳುವವರು
ಜೀವವನ್ನು ಹೊಂದುವರು. 26ತಂದೆಯು ಜೀವಕೊಡುವ
ಶಕ್ತಿಯನ್ನು ತಾನು ಹೊಂದಿರುವಂತೆ ಮಗನಿಗೂ ಜೀವಕೊಡುವ
ಶಕ್ತಿಯನ್ನು ಅನುಗ್ರಹಿಸಿದನು. 27ಮತ್ತು ಎಲ್ಲಾ ಜನರಿಗೆ ತೀರ್ಪು
ಮಾಡುವ ಅಧಿಕಾರವನ್ನು ತಂದೆಯು ಮಗನಿಗೂ ಕೊಟ್ಟಿದ್ದಾನೆ.
ಏಕೆಂದರೆ ಆ ಮಗನು ಮನುಷ್ಯಕುಮಾರನಾಗಿದ್ದಾನೆ. 28ಇದರ
ಬಗ್ಗೆ ಆಶ್ಚರ್ಯಪಡಬೇಡಿರಿ. ಏಕೆಂದರೆ ಸಮಾಧಿಗಳಲ್ಲಿರುವ
ಜನರೆಲ್ಲರೂ ಆತನ ಸ್ವರವನ್ನು ಕೇಳುವ ಕಾಲ ಬರುತ್ತದೆ. 29ಆಗ
ಅವರು ತಮ್ಮ ಸಮಾಧಿಗಳಿಂದ ಎದ್ದು ಬರುವರು. ಜೀವನದಲ್ಲಿ
ಒಳ್ಳೆಯದನ್ನು ಮಾಡಿದ ಜನರು ಪುನರುತ್ಥಾನಗೊಂಡು ನಿತ್ಯ
ಜೀವವನ್ನು ಹೊಂದಿಕೊಳ್ಳುವರು. ಆದರೆ ಕೆಟ್ಟದ್ದನ್ನು ಮಾಡಿ
ದವರಿಗೆ ತೀರ್ಪಿಗಾಗಿ ಪುನರುತ್ಥಾನವಾಗುವುದು.

30‘‘ನಾನು ಒಬ್ಬಂಟಿಗನಾಗಿ ಏನೂ ಮಾಡಲಾರೆನು. ನಾನು
ಕೇಳಿದ್ದಕ್ಕನುಸಾರವಾಗಿ ತೀರ್ಪು ಮಾಡುತ್ತೇನೆ. ಆದ್ದರಿಂದ ನನ್ನ

---

**ವಚನ 3** ಕೆಲವು ಗ್ರೀಕ್ ಪ್ರತಿಗಳಲ್ಲಿ ಹೀಗೆ ಬರೆದಿದೆ: ‘‘ಇವರು ನೀರು ಉಕ್ಕುವುದನ್ನು ಕಾದುಕೊಂಡಿರುವರು.’’ ವಚನ 4 ‘‘ಒಬ್ಬ ದೇವದೂತನು ಆಗಾಗ್ಗೆ ಕೊಳದಲ್ಲಿ ಇಳಿದುಬಂದು ನೀರನ್ನು ಉಕ್ಕಿಸುವನು; ನೀರನ್ನು ಉಕ್ಕಿಸಿದ ಮೇಲೆ ಮೊದಲು ಒಳಗೆ ಹೋದವನು ಯಾವ ರೋಗದಲ್ಲಿ ಬಿದ್ದಿದ್ದರೂ ಸ್ವಸ್ಥನಾಗುವನು.’’

**ಸಬ್ಬತ್‌ದಿನ** ಯೆಹೂದ್ಯರ ವಾರದಲ್ಲಿ ಶನಿವಾರವು ಏಳನೆಯ ದಿನ.

ತೀರ್ಪು ಸರಿಯಾದದ್ದು. ಏಕೆಂದರೆ, ನಾನು ನನ್ನನ್ನು ಮೆಚ್ಚಿಸಲು
ಪ್ರಯತ್ನಿಸದೆ ನನ್ನ ತಂದೆಯನ್ನು ಮೆಚ್ಚಿಸಲು ಪ್ರಯತ್ನಿಸುತ್ತೇನೆ.

31“ನನ್ನ ವಿಷಯವಾಗಿ ನಾನೇ ಹೇಳಿಕೊಂಡರೆ, ನನ್ನ
ಸಾಕ್ಷಿಯು ಸತ್ಯವಾದದ್ದಲ್ಲ. 32ಆದರೆ ನನ್ನ ವಿಷಯವಾಗಿ ಜನರಿಗೆ
ಹೇಳುವ ಮತ್ತೊಬ್ಬ ವ್ಯಕ್ತಿಯಿದ್ದಾನೆ. ನನ್ನ ಬಗ್ಗೆ ಅವನು ಹೇಳುವ
ಸಂಗತಿಗಳು ಸತ್ಯವಾಗಿವೆಯೆಂದು ನನಗೆ ಗೊತ್ತಿದೆ.

33“ನೀವು ಯೋಹಾನನ ಬಳಿಗೆ ಜನರನ್ನು ಕಳುಹಿಸಿದ್ದಿರಿ.
ಅವನು ನಿಮಗೆ ಸತ್ಯದ ಬಗ್ಗೆ ತಿಳಿಸಿದನು. 34ಆದರೆ ನನ್ನ ಬಗ್ಗೆ
ಜನರಿಗೆ ತಿಳಿಸುವುದಕ್ಕಾಗಿ ನನಗೆ ಮನುಷ್ಯನೊಬ್ಬನ ಅಗತ್ಯವಿಲ್ಲ.
ಆದರೆ ನಿಮಗೆ ರಕ್ಷಣೆಯಾಗಬೇಕೆಂದು ನಾನು ಈ
ಸಂಗತಿಗಳನ್ನು ಹೇಳುತ್ತಿದ್ದೇನೆ. 35ಯೋಹಾನನು ಉರಿಯುವ
ದೀಪದಂತೆ ಬೆಳಕನ್ನು ಕೊಟ್ಟನು. ಮತ್ತು ನೀವು ಅವನ ಬೆಳಕನ್ನು
ಸ್ವಲ್ಪಕಾಲ ಸಂತೋಷದಿಂದ ಅನುಭವಿಸಿದಿರಿ.

36“ಆದರೆ ನನ್ನ ಬಗ್ಗೆ ನನ್ನಲ್ಲಿ ಯೋಹಾನನಿಗಿಂತಲೂ
ಹೆಚ್ಚಿನ ಸಾಕ್ಷಿಗಳಿವೆ. ನಾನು ಮಾಡುವ ಕಾರ್ಯಗಳೇ ನನ್ನ
ಸಾಕ್ಷಿಗಳಾಗಿವೆ. ತಂದೆಯು ನನಗೆ ಕೊಟ್ಟಿರುವ ಈ ಕಾರ್ಯ
ಗಳೇ, ತಂದೆಯು ನನ್ನನ್ನು ಕಳುಹಿಸಿ ಕೊಟ್ಟಿದ್ದಾನೆ ಎಂಬುದನ್ನು
ತೋರಿಸುತ್ತವೆ. 37ಅಲ್ಲದೆ ನನ್ನನ್ನು ಕಳುಹಿಸಿದ ತಂದೆಯು ನನ್ನ
ಬಗ್ಗೆ ತಾನೇ ಸಾಕ್ಷಿ ಕೊಟ್ಟಿದ್ದಾನೆ. ಆದರೆ ನೀವು ಆತನ ಧ್ವನಿಯನ್ನು
ಎಂದೂ ಕೇಳಿಲ್ಲ. ಆತನು ಹೇಗಿದ್ದಾನೆ ಎಂಬುದನ್ನು ನೀವು
ಎಂದೂ ಕಂಡಿಲ್ಲ. 38ತಂದೆಯ ಉಪದೇಶವು ನಿಮ್ಮಲ್ಲಿ ನೆಲೆಸಿಲ್ಲ.
ಏಕೆಂದರೆ ತಂದೆಯು ಕಳುಹಿಸಿರುವಾತನನ್ನು ನೀವು ನಂಬು
ವುದಿಲ್ಲ.

39ನೀವು ಪವಿತ್ರ ಗ್ರಂಥವನ್ನು ಜಾಗ್ರತೆಯಿಂದ ಅಧ್ಯಯನ
ಮಾಡುತ್ತೀರಿ. ಆ ಪವಿತ್ರ ಗ್ರಂಥವು ನಿಮಗೆ ನಿತ್ಯ ಜೀವವನ್ನು
ಕೊಡುತ್ತವೆ? ಎಂಬುದು ನಿಮ್ಮ ಆಲೋಚನೆ. ಆ ಪವಿತ್ರ
ಗ್ರಂಥವೂ ನನ್ನ ಬಗ್ಗೆ ತಿಳಿಸುತ್ತದೆ! 40ಆದರೆ ನೀವು ಬಯಸುವ
ಆ ಜೀವವನ್ನು ನನ್ನ ಬಳಿಗೆ ಬಂದು ಹೊಂದಿಕೊಳ್ಳಲು ನಿಮಗೆ
ಇಷ್ಟವಿಲ್ಲ.

41“ಮನುಷ್ಯರಿಂದ ಬರುವ ಹೊಗಳಿಕೆಯು ನನಗೆ
ಬೇಕಾಗಿಲ್ಲ. 42ಆದರೆ ನಾನು ನಿಮ್ಮನ್ನು ಬಲ್ಲೆನು. ದೇವರ ಮೇಲೆ
ನಿಮಗೆ ಪ್ರೀತಿಯಿಲ್ಲವೆಂದು ನನಗೆ ಗೊತ್ತಿದೆ. 43ನಾನು ನನ್ನ
ತಂದೆಯ ಹೆಸರಿನಲ್ಲಿ ಬಂದಿದ್ದೇನೆ. ನಾನು ಆತನಿಗೋಸ್ಕರ
ಮಾತಾಡುತ್ತೇನೆ. ಆದರೆ ನೀವು ನನ್ನನ್ನು ಸ್ವೀಕರಿಸಿಕೊಳ್ಳು
ವುದಿಲ್ಲ. ಮತ್ತೊಬ್ಬನು ಬಂದು ತನಗೋಸ್ಕರವಾಗಿ ಮಾತಾ
ಡಿದರೆ ನೀವು ಅವನನ್ನು ಸ್ವೀಕರಿಸಿಕೊಳ್ಳುತ್ತೀರಿ. 44ನೀವು
ಪರಸ್ಪರ ಸನ್ಮಾನವನ್ನು ಬಯಸುತ್ತೀರಿ. ಆದರೆ ಒಬ್ಬನೇ
ದೇವರಿಂದ ಬರುವ ಸನ್ಮಾನವನ್ನು ಪಡೆದುಕೊಳ್ಳಲು ನೀವೆಂದೂ
ಪ್ರಯತ್ನಿಸುವುದಿಲ್ಲ. ಹೀಗಿರಲು ನೀವು ಹೇಗೆ ನಂಬಬಲ್ಲಿರಿ?
45ನಾನು ತಂದೆಯ ಮುಂದೆ ನಿಂತುಕೊಂಡು ನಿಮ್ಮನ್ನು ತಪ್ಪಿತಸ್ಥ
ರೆಂಬುದಾಗಿ ಹೇಳುತ್ತೇನೆಂದು ಯೋಚಿಸಬೇಡಿರಿ. ನಿಮ್ಮನ್ನು
ರಕ್ಷಿಸುತ್ತಾನೆಂದು ನೀವು ನಿರೀಕ್ಷಿಸಿಕೊಂಡಿರುವ ಮೋಶೆಯೇ
ನಿಮ್ಮ ಮೇಲೆ ದೂರು ಹೇಳುವನು. 46ನೀವು ಮೋಶೆಯನ್ನು
ನಿಜವಾಗಿಯೂ ನಂಬಿದ್ದರೆ, ನನ್ನನ್ನೂ ನಂಬುತ್ತಿದ್ದಿರಿ.
ಯಾಕೆಂದರೆ ಅವನು ನನ್ನ ವಿಷಯವಾಗಿ ಬರೆದಿದ್ದಾನೆ. 47ಆದರೆ
ಮೋಶೆ ಬರೆದದ್ದನ್ನು ನೀವು ನಂಬುವುದಿಲ್ಲ. ಹೀಗಿರಲು ನಾನು
ಹೇಳುವ ಸಂಗತಿಗಳನ್ನು ನೀವು ಹೇಗೆ ನಂಬಬಲ್ಲಿರಿ?”

### ಐದು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮತ್ತಾಯ 14:13-21; ಮಾರ್ಕ 6:30-44; ಲೂಕ 9:10-17)

6 ತರುವಾಯ, ಯೇಸು ಗಲಿಲೇಯ ಸರೋವರವನ್ನು
(ತಿಬೇರಿಯ ಸರೋವರ) ದಾಟಿ ಆಚೆಯ ದಡಕ್ಕೆ
ಹೋದನು. 2ಅನೇಕ ಜನರು ಯೇಸುವನ್ನು ಹಿಂಬಾಲಿಸಿದರು.
ಏಕೆಂದರೆ ಯೇಸು ರೋಗಿಗಳನ್ನು ಗುಣಪಡಿಸುವುದರ
ಮೂಲಕ ತನ್ನ ಅಧಿಕಾರವನ್ನು ತೋರಿಸಿದ್ದನು. ಅವರೆಲ್ಲರೂ
ಅದನ್ನು ನೋಡಿದ್ದರು. 3ಆಗ ಯೇಸು ಬೆಟ್ಟವನ್ನು ಹತ್ತಿ ತನ್ನ
ಶಿಷ್ಯರ ಸಂಗಡ ಕುಳಿತುಕೊಂಡನು. 4ಯೆಹೂದ್ಯರ ಪಸ್ಕ
ಹಬ್ಬವೂ ಬಹು ಸಮೀಪವಾಗಿತ್ತು.

5ಯೇಸು ಕಣ್ಣೆತ್ತಿ ನೋಡಿದಾಗ, ತನ್ನ ಬಳಿಗೆ ಬರುತ್ತಿದ್ದ
ಜನಸಮೂಹವನ್ನು ಕಂಡು ಫಿಲಿಪ್ಪನಿಗೆ, “ಈ ಜನರಿಗೆಲ್ಲಾ
ಸಾಕಾಗುವಷ್ಟು ರೊಟ್ಟಿಯನ್ನು ನಾವು ಎಲ್ಲಿ ಕೊಂಡು
ಕೊಳ್ಳೋಣ?” ಎಂದು ಕೇಳಿದನು. 6(ಫಿಲಿಪ್ಪನನ್ನು ಪರೀಕ್ಷಿಸು
ವುದಕ್ಕಾಗಿ ಆತನು ಈ ಪ್ರಶ್ನೆಯನ್ನು ಕೇಳಿದನು. ತಾನು ಮಾಡ
ಲಿದ್ದ ಕಾರ್ಯ ಯೇಸುವಿಗೆ ಮೊದಲೇ ತಿಳಿದಿತ್ತು.)

7ಫಿಲಿಪ್ಪನು, “ಇಲ್ಲಿರುವ ಪ್ರತಿಯೊಬ್ಬರಿಗೆ ರೊಟ್ಟಿಯ
ಒಂದು ತುಂಡನ್ನು ಕೊಡಬೇಕಾದರೆ, ಇನ್ನೂರು ದಿನಾರಿ ನಾಣ್ಯ
ಗಳಾದರೂ* ಬೇಕು” ಎಂದು ಉತ್ತರಕೊಟ್ಟನು.

8ಅಂದ್ರೆಯನೆಂಬ ಮತ್ತೊಬ್ಬ ಶಿಷ್ಯನು ಅಲ್ಲಿದ್ದನು. ಅಂದ್ರೆ
ಯನು ಸೀಮೋನ್ ಪೇತ್ರನ ಸಹೋದರ. 9ಅಂದ್ರೆಯನು,
“ಇಲ್ಲಿರುವ ಒಬ್ಬ ಹುಡುಗನ ಬಳಿ ಜವೆಗೋದಿಯ ಐದು
ರೊಟ್ಟಿಗಳಿವೆ ಮತ್ತು ಎರಡು ಚಿಕ್ಕ ಮೀನುಗಳಿವೆ. ಆದರೆ ಅವು
ಈ ಜನಸಮೂಹಕ್ಕೆ ಸಾಕಾಗುವುದಿಲ್ಲ” ಎಂದು ಹೇಳಿದನು.

10ಯೇಸು, “ಜನರಿಗೆ ಕುಳಿತುಕೊಳ್ಳಲು ಹೇಳಿರಿ” ಎಂದು
ತಿಳಿಸಿದನು. ಆ ಸ್ಥಳದಲ್ಲಿ ಹುಲ್ಲು ಹುಲುಸಾಗಿ ಬೆಳೆದಿತ್ತು. ಅಲ್ಲಿ
ಕುಳಿತುಕೊಂಡವರಲ್ಲಿ ಸುಮಾರು ಐದು ಸಾವಿರ ಮಂದಿ
ಗಂಡಸರಿದ್ದರು.

11ಬಳಿಕ ಯೇಸು ಆ ರೊಟ್ಟಿಗಳನ್ನು ತೆಗೆದು ಕೊಂಡು
ಅವುಗಳಿಗಾಗಿ ದೇವರಿಗೆ ಸ್ತೋತ್ರಸಲ್ಲಿಸಿ, ಕೆಳಗೆ
ಕುಳಿತುಕೊಂಡಿದ್ದ ಜನರಿಗೆ ಕೊಟ್ಟನು. ಆತನು ಮೀನುಗಳನ್ನು
ಕೊಡುವಾಗಲೂ ಅದೇ ರೀತಿ ಮಾಡಿದನು. ಎಲ್ಲರೂ ತಮಗೆ
ಬೇಕಾದಷ್ಟು ತಿಂದರು.

12ಅವರೆಲ್ಲರೂ ಊಟ ಮಾಡಿ ತೃಪ್ತರಾದ ಮೇಲೆ ಯೇಸು
ತನ್ನ ಶಿಷ್ಯರಿಗೆ, “ಉಳಿದುಹೋದ ರೊಟ್ಟಿ ಮತ್ತು ಮೀನುಗಳ
ತುಂಡುಗಳನ್ನು ಒಟ್ಟುಗೂಡಿಸಿರಿ. ಯಾವುದನ್ನೂ ಹಾಳುಮಾಡ
ಬೇಡಿ” ಎಂದು ಹೇಳಿದನು. 13ಆದ್ದರಿಂದ ಶಿಷ್ಯರು ಉಳಿದು
ಹೋಗಿದ್ದ ತುಂಡುಗಳನ್ನು ಒಟ್ಟುಗೂಡಿಸಿದರು. ಜನರು ತಿನ್ನಲು
ಆರಂಭಿಸಿದಾಗ ಕೇವಲ ಐದು ಜವೆಗೋದಿಯ ರೊಟ್ಟಿ
ಗಳಿದ್ದವು. ಆದರೆ ಶಿಷ್ಯರು ಉಳಿದುಹೋದ ಆಹಾರದ ತುಂಡು
ಗಳನ್ನು ಒಟ್ಟುಗೂಡಿಸಿದಾಗ ಹನ್ನೆರಡು ದೊಡ್ಡ ಬುಟ್ಟಿಗಳು
ತುಂಬಿಹೋದವು.

14ಯೇಸು ಮಾಡಿದ ಈ ಸೂಚಕಕಾರ್ಯವನ್ನು ಕಂಡ
ಜನರು, “ಈ ಲೋಕಕ್ಕೆ ಬರಲಿರುವ ಪ್ರವಾದಿ ನಿಜವಾಗಿಯೂ
ಈತನೇ ಇರಬೇಕು” ಎಂದು ಹೇಳತೊಡಗಿದರು.

---

**ಇನ್ನೂರು ದಿನಾರಿ ನಾಣ್ಯ** ಒಬ್ಬನಿಗೆ ದೊರೆಯುತ್ತಿದ್ದ ಒಂದು ವರ್ಷದ ಆದಾಯ.

15ತನ್ನನ್ನು ಬಲವಂತದಿಂದ ರಾಜನನ್ನಾಗಿ ಮಾಡಲು ಜನರು
ಯೋಚಿಸುತ್ತಿದ್ದಾರೆಂಬುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ
ಆತನು ಅಲ್ಲಿಂದ ತಾನೊಬ್ಬನೇ ಬೆಟ್ಟಕ್ಕೆ ಮತ್ತೆ ಹೋದನು.

### ನೀರಿನ ಮೇಲೆ ಕಾಲ್ನಡಿಗೆ

(ಮತ್ತಾಯ 14:22-27; ಮಾರ್ಕ 6:45-52)

16ಆ ಸಾಯಂಕಾಲ ಯೇಸುವಿನ ಶಿಷ್ಯರು (ಗಲಿಲೀಯ)
ಸರೋವರಕ್ಕೆ ಹೋದರು. 17ಆಗಲೇ ಕತ್ತಲಾಗಿತ್ತು. ಯೇಸು
ಅವರ ಬಳಿಗೆ ಇನ್ನೂ ಬಂದಿರಲಿಲ್ಲ. ಆದ್ದರಿಂದ ಶಿಷ್ಯರು ದೋಣಿ
ಯನ್ನು ಹತ್ತಿ ಸರೋವರದ ಆಚೆಯ ಕಡೆಯಿದ್ದ ಕಪೆರ್ನೌಮಿಗೆ
ಹೊರಟರು. 18ಗಾಳಿಯು ಬಹು ರಭಸವಾಗಿ ಬೀಸುತ್ತಿತ್ತು.
ಸರೋವರದ ಅಲೆಗಳು ದೊಡ್ಡದಾಗುತ್ತಿದ್ದವು. 19ಅವರು
ಹುಟ್ಟುಹಾಕುತ್ತಾ ಸುಮಾರು ಮೂರು ಅಥವಾ ನಾಲ್ಕು
ಮೈಲಿಗಳವರೆಗೆ ದೋಣಿಯನ್ನು ನಡೆಸಿದ ನಂತರ ಯೇಸುವನ್ನು
ಕಂಡರು. ಆತನು ನೀರಿನ ಮೇಲೆ ನಡೆಯುತ್ತಾ ದೋಣಿಯ
ಸಮೀಪಕ್ಕೆ ಬರುತ್ತಿರುವುದನ್ನು ಕಂಡು ಅವರಿಗೆ ಭಯ
ವಾಯಿತು. 20ಯೇಸು ಅವರಿಗೆ, ''ಹೆದರಬೇಡಿರಿ, ನಾನೇ''
ಎಂದು ಹೇಳಿದನು. 21ಆಗ ಅವರು ಯೇಸುವನ್ನು ದೋಣಿ
ಯೊಳಗೆ ಬರಮಾಡಿಕೊಳ್ಳಬೇಕೆಂದಿದ್ದರು. ಅಷ್ಟರಲ್ಲೇ, ಅವರು
ಹೋಗಬೇಕೆಂದಿದ್ದ ಸ್ಥಳದ ದಡಕ್ಕೆ ದೋಣಿಯು ತಲುಪಿತು.

### ಯೇಸುವಿಗಾಗಿ ಹುಡುಕಾಟ

22ಮರುದಿನವಾಯಿತು. ಕೆಲವು ಜನರು ಸರೋವರದ
ಮತ್ತೊಂದು ಕಡೆಯಲ್ಲಿ ಉಳಿದುಕೊಂಡಿದ್ದರು. ಯೇಸು ತನ್ನ
ಶಿಷ್ಯರೊಂದಿಗೆ ದೋಣಿಯಲ್ಲಿ ಹೋಗಲಿಲ್ಲ ಎಂಬುದು ಈ
ಜನರಿಗೆ ತಿಳಿದಿತ್ತು. ಯೇಸುವಿನ ಶಿಷ್ಯರು ಮಾತ್ರ ದೋಣಿಯಲ್ಲಿ
ಹೋದರೆಂಬುದೂ ಮತ್ತು ಅದೊಂದು ದೋಣಿ ಮಾತ್ರ
ಅಲ್ಲಿತ್ತೆಂಬುದೂ ಅವರಿಗೆ ಗೊತ್ತಿತ್ತು. 23ಆದರೆ ಅಷ್ಟರಲ್ಲಿಯೇ,
ಕೆಲವು ದೋಣಿಗಳು ತಿಬೇರಿಯಾದಿಂದ ಬಂದವು. ಅವರು
ಊಟಮಾಡಿದ ಸ್ಥಳಕ್ಕೆ ಸಮೀಪದ ದಡದಲ್ಲಿಯೇ ಆ ದೋಣಿ
ಗಳು ನಿಂತುಕೊಂಡವು. ಪ್ರಭುವು (ಯೇಸು) ಸ್ತೋತ್ರ ಮಾಡಿದ
ಮೇಲೆ ಅವರು ರೊಟ್ಟಿಯನ್ನು ಆ ಸ್ಥಳದಲ್ಲೇ ತಿಂದಿದ್ದರು.
24ಯೇಸು ಮತ್ತು ಆತನ ಶಿಷ್ಯರು ಅಲ್ಲಿಲ್ಲದಿರುವುದನ್ನು ಜನರು
ಕಂಡು ದೋಣಿಗಳನ್ನು ಹತ್ತಿ ಯೇಸುವನ್ನು ಹುಡುಕುತ್ತಾ
ಕಪೆರ್ನೌಮಿಗೆ ಹೋದರು. ಅವರು ಯೇಸುವನ್ನು ಕಂಡು
ಕೊಳ್ಳಬೇಕೆಂದಿದ್ದರು.

### ಯೇಸುವೇ ಜೀವದ ರೊಟ್ಟಿ

25ಜನರು ಯೇಸುವನ್ನು ಸರೋವರದ ಆಚೆಯ ದಡದಲ್ಲಿ
ಕಂಡುಕೊಂಡರು. ಅವರು ಆತನಿಗೆ, ''ಗುರುವೇ, ನೀನು ಇಲ್ಲಿಗೆ
ಯಾವಾಗ ಬಂದೆ?'' ಎಂದು ಕೇಳಿದರು.

26ಯೇಸು, ''ನೀವು ನನ್ನನ್ನು ಏಕೆ ಹುಡುಕುತ್ತಿದ್ದೀರಿ? ನನ್ನ
ಅಧಿಕಾರವನ್ನು ನಿರೂಪಿಸುವ ನನ್ನ ಅದ್ಭುತ ಕಾರ್ಯಗಳನ್ನು
ಕಂಡು ನೀವು ನನ್ನನ್ನು ಹುಡುಕುತ್ತಿದ್ದೀರೋ? ಇಲ್ಲ! ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ರೊಟ್ಟಿಯನ್ನು ತೃಪ್ತಿ
ಯಾಗುವಷ್ಟು ತಿಂದಕಾರಣ ನನ್ನನ್ನು ಹುಡುಕುತ್ತಿದ್ದೀರಿ. 27ಈ
ಲೋಕದ ಆಹಾರವು ಕೆಟ್ಟುಹೋಗುತ್ತದೆ ಮತ್ತು ಹಾಳಾಗುತ್ತದೆ.
ಆದ್ದರಿಂದ ಅಂಥ ಆಹಾರವನ್ನು ಪಡೆದುಕೊಳ್ಳಲು ದುಡಿಯ
ಬೇಡಿರಿ. ಆದರೆ ಎಂದಿಗೂ ಕೆಟ್ಟುಹೋಗದಂಥ ಮತ್ತು ನಿಮಗೆ
ನಿತ್ಯಜೀವವನ್ನು ಕೊಡುವಂಥ ಆಹಾರವನ್ನು ಪಡೆದುಕೊಳ್ಳಲು
ದುಡಿಯಿರಿ. ಮನುಷ್ಯಕುಮಾರನು ಆ ಆಹಾರವನ್ನು ನಿಮಗೆ
ಕೊಡುವನು. ತಂದೆಯಾದ ದೇವರು ಆತನ ಮೇಲೆ ತನ್ನ
ಅಧಿಕಾರದ ಮುದ್ರೆಯನ್ನು ಒತ್ತಿದ್ದಾನೆ'' ಎಂದು ಹೇಳಿದನು.

28ಜನರು ಯೇಸುವಿಗೆ, ''ನಾವು ಯಾವ ಕಾರ್ಯಗಳನ್ನು
ಮಾಡಬೇಕೆಂದು ದೇವರು ಬಯಸುತ್ತಾನೆ?'' ಎಂದು
ಕೇಳಿದರು.

29ಯೇಸು, ''ದೇವರು ಕಳುಹಿಸಿದಾತನನ್ನು ನೀವು ನಂಬ
ಬೇಕು. ಈ ಕಾರ್ಯವನ್ನೇ ದೇವರು ನಿಮ್ಮಿಂದ ಅಪೇಕ್ಷಿಸು
ತ್ತಾನೆ'' ಎಂದು ಉತ್ತರಕೊಟ್ಟನು.

30ಆದ್ದರಿಂದ ಜನರು, ''ದೇವರಿಂದ ಕಳುಹಿಸಲ್ಪಟ್ಟಾತನು
ನೀನೇ ಎಂಬುದನ್ನು ನಿರೂಪಿಸುವುದಕ್ಕಾಗಿ ನೀನು ಯಾವ
ಸೂಚಕಕಾರ್ಯವನ್ನು ಮಾಡುವೆ? 31ನಮ್ಮ ಪಿತೃಗಳು ತಮಗೆ
ದೇವರು ಮರುಭೂಮಿಯಲ್ಲಿ ಕೊಟ್ಟ ಮನ್ನವನ್ನು
(ಆಹಾರವನ್ನು) ತಿಂದರು. 'ದೇವರು ಅವರಿಗೆ ತಿನ್ನಲು
ಪರಲೋಕದಿಂದ ರೊಟ್ಟಿಯನ್ನು ಕೊಟ್ಟನು* ಎಂದು ಪವಿತ್ರ
ಗ್ರಂಥದಲ್ಲಿ ಬರೆದಿದೆ'' ಎಂದು ಹೇಳಿದರು.

32ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನಿಮ್ಮ
ಜನರಿಗೆ ಪರಲೋಕದಿಂದ ರೊಟ್ಟಿಯನ್ನು ಕೊಟ್ಟವನು ಮೋಶೆ
ಯಲ್ಲ. ಆದರೆ ನನ್ನ ತಂದೆಯು ನಿಮಗೆ ಪರಲೋಕದಿಂದ
ನಿಜವಾದ ರೊಟ್ಟಿಯನ್ನು ಕೊಡುವನು. 33ದೇವರ ರೊಟ್ಟಿ
ಯಾವುದು? ಪರಲೋಕದಿಂದ ಇಳಿದುಬಂದು ಈ ಲೋಕ
ಕ್ಕಾಗಿ ಜೀವವನ್ನು ಕೊಡುವಾತನೇ ದೇವರು ಕೊಡುವ ರೊಟ್ಟಿ''
ಎಂದು ಹೇಳಿದನು. 34ಜನರು, ''ಅಯ್ಯಾ, ಆ ರೊಟ್ಟಿಯನ್ನು
ನಮಗೆ ಯಾವಾಗಲೂ ಕೊಡು'' ಎಂದು ಕೇಳಿಕೊಂಡರು.

35ಅದಕ್ಕೆ ಯೇಸು, ''ನಾನೇ ಜೀವಕೊಡುವ ರೊಟ್ಟಿ. ನನ್ನ
ಬಳಿಗೆ ಬರುವವನಿಗೆ ಎಂದಿಗೂ ಹಸಿವೆಯಾಗದು. ನನ್ನಲ್ಲಿ
ನಂಬಿಕೆ ಇಡುವವನಿಗೆ ಎಂದಿಗೂ ಬಾಯಾರಿಕೆಯಾಗದು.
36ನಾನು ನಿಮಗೆ ಮೊದಲೇ ಹೇಳಿದಂತೆ, ನೀವು ನನ್ನನ್ನು
ನೋಡಿದ್ದರೂ ಇನ್ನೂ ನನ್ನನ್ನು ನಂಬುತ್ತಿಲ್ಲ. 37ತಂದೆಯು ನನ್ನ
ಜನರನ್ನು ನನಗೆ ಕೊಡುತ್ತಾನೆ. ಆ ಜನರಲ್ಲಿ ಪ್ರತಿಯೊಬ್ಬರೂ
ನನ್ನ ಬಳಿಗೆ ಬರುತ್ತಾರೆ. ನನ್ನಲ್ಲಿಗೆ ಬರುವ ಪ್ರತಿಯೊಬ್ಬರನ್ನೂ
ನಾನು ಖಂಡಿತವಾಗಿ ಸ್ವೀಕರಿಸಿಕೊಳ್ಳುವೆನು, ಅವರನ್ನೆಂದಿಗೂ
ತಳ್ಳಿಬಿಡುವುದಿಲ್ಲ. 38ನಾನು ಪರಲೋಕದಿಂದ ಇಳಿದು
ಬಂದದ್ದು ದೇವರ ಚಿತ್ತಕ್ಕನುಸಾರವಾಗಿ ಮಾಡುವುದಕ್ಕಾಗಿಯೇ
ಹೊರತು ನನ್ನ ಚಿತ್ತಕ್ಕನುಸಾರವಾಗಿಯಲ್ಲ. 39ದೇವರು ನನಗೆ
ಕೊಟ್ಟಿರುವ ಯಾವ ವ್ಯಕ್ತಿಯನ್ನೂ ನಾನು ಕಳೆದುಕೊಳ್ಳ
ಕೂಡದು. ಅಲ್ಲದೆ ಅಂತಿಮ ದಿನದಂದು ನಾನು ಆ ಜನರನ್ನು
ಜೀವಂತವಾಗಿ ಎಬ್ಬಿಸಬೇಕು. ನನ್ನನ್ನು ಕಳುಹಿಸಿದಾತನು ಆ
ಕಾರ್ಯವನ್ನೇ ನನ್ನಿಂದ ಅಪೇಕ್ಷಿಸುತ್ತಾನೆ. 40ಮಗನನ್ನು ನೋಡಿ
ಆತನಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬನೂ ನಿತ್ಯಜೀವವನ್ನು
ಹೊಂದಿದ್ದಾನೆ. ಅಂತಿಮ ದಿನದಂದು ನಾನು ಆ ವ್ಯಕ್ತಿಯನ್ನು
ಜೀವಂತವಾಗಿ ಎಬ್ಬಿಸುವೆನು. ನನ್ನ ತಂದೆಯು ಬಯಸುವುದು
ಇದನ್ನೇ'' ಎಂದನು.

---

**ದೇವರು ... ಕೊಟ್ಟನು** ಕೀರ್ತನೆ 78:24

41ಯೆಹೂದ್ಯರು ಯೇಸುವಿನ ಬಗ್ಗೆ ಗುಣಗುಟ್ಟಿದರು.
‘‘ಪರಲೋಕದಿಂದ ಇಳಿದುಬರುವ ರೊಟ್ಟಿಯೇ ನಾನು’’
ಎಂದು ಆತನು ಹೇಳಿದ್ದರಿಂದ ಅವರು ಆಕ್ಷೇಪಿಸಿದರು.
42ಯೆಹೂದ್ಯರು, ‘‘ಇವನು ಯೇಸು. ಇವನ ತಂದೆ
ತಾಯಿಗಳನ್ನು ನಾವು ಬಲ್ಲೆವು. ಇವನು ಕೇವಲ ಯೋಸೇಫನ
ಮಗನು. ನಾನು ಪರಲೋಕದಿಂದ ಇಳಿದುಬಂದೆನು ಎಂದು
ಇವನು ಹೇಳುವುದಕ್ಕೆ ಹೇಗೆ ಸಾಧ್ಯ?’’ ಎಂದರು.

43ಅದಕ್ಕೆ ಯೇಸು, ‘‘ನೀವು ಗುಣಗುಟ್ಟುತ್ತಿರುವುದನ್ನು
ನಿಲ್ಲಿಸಿರಿ. 44ತಂದೆಯೇ ನನ್ನನ್ನು ಕಳುಹಿಸಿದನು ಮತ್ತು
ತಂದೆಯೇ ನನ್ನ ಬಳಿಗೆ ಜನರನ್ನು ಕರೆತರುವವನು. ಅಂತಿಮ
ದಿನದಂದು ನಾನು ಆ ಜನರನ್ನು ಜೀವಂತವಾಗಿ ಎಬ್ಬಿಸುವೆನು.
ತಂದೆಯು ನನ್ನ ಬಳಿಗೆ ಕರೆದುಕೊಂಡು ಬರದ ಹೊರತು
ಯಾವನೂ ನನ್ನ ಬಳಿಗೆ ಬರಲಾರನು. 45‘ದೇವರು ಎಲ್ಲಾ
ಜನರಿಗೆ ಉಪದೇಶಿಸುವನು’* ಎಂದು ಪವಿತ್ರ ಗ್ರಂಥದಲ್ಲಿ
ಬರೆದಿದೆ. ಜನರು ತಂದೆಗೆ ಕಿವಿಗೊಟ್ಟು ಆತನಿಂದ ಕಲಿತು
ಕೊಳ್ಳುವರು. ಆ ಜನರು ನನ್ನ ಬಳಿಗೆ ಬರುವರು. 46ತಂದೆ
ಯಿಂದ ಬಂದಿರುವಾತನು ಮಾತ್ರ ತಂದೆಯನ್ನು ನೋಡಿದವ
ನಾಗಿದ್ದಾನೆ. ಬೇರೆ ಯಾವ ವ್ಯಕ್ತಿಯೂ ತಂದೆಯನ್ನು ಎಂದೂ
ನೋಡಿಲ್ಲ. 47ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನನ್ನನ್ನು
ನಂಬಿರುವವನು ನಿತ್ಯಜೀವವನ್ನು ಹೊಂದಿದ್ದಾನೆ. 48ನಾನೇ
ಜೀವಕೊಡುವ ರೊಟ್ಟಿ. 49ನಿಮ್ಮ ಪಿತೃಗಳು ತಮಗೆ ದೇವರು
ಮರುಭೂಮಿಯಲ್ಲಿ ಕೊಟ್ಟ ಮನ್ನವನ್ನು ತಿಂದರು. ಆದರೆ ಎಲ್ಲಾ
ಜನರಂತೆ ಅವರೂ ಸತ್ತುಹೋದರು. 50ಪರಲೋಕದಿಂದ
ಇಳಿದುಬರುವ ಆ ರೊಟ್ಟಿ ನಾನೇ. ಈ ರೊಟ್ಟಿಯನ್ನು
ತಿನ್ನುವವನು ಎಂದಿಗೂ ಸಾಯುವುದಿಲ್ಲ. 51ಪರಲೋಕದಿಂದ
ಇಳಿದುಬಂದ ಜೀವವುಳ್ಳ ರೊಟ್ಟಿ ನಾನೇ. ಈ ರೊಟ್ಟಿಯನ್ನು
ತಿನ್ನುವವನು ಶಾಶ್ವತವಾಗಿ ಜೀವಿಸುವನು. ಈ ರೊಟ್ಟಿಯೇ ನನ್ನ
ದೇಹ. ಈ ಲೋಕದಲ್ಲಿರುವ ಜನರು ಜೀವವನ್ನು ಹೊಂದಿ
ಕೊಳ್ಳಲೆಂದು ನಾನು ನನ್ನ ದೇಹವನ್ನೇ ಕೊಡುತ್ತೇನೆ’’ಎಂದು
ಉತ್ತರಕೊಟ್ಟನು. 53ಆಗ ಯೆಹೂದ್ಯರು, ‘‘ಈ ಮನುಷ್ಯನು ತನ್ನ
ದೇಹವನ್ನು ನಮಗೆ ತಿನ್ನಲು ಹೇಗೆ ಕೊಡಲಾದೀತು?’’ ಎಂದು
ತಮ್ಮ ತಮ್ಮೊಳಗೆ ವಾಗ್ವಾದ ಮಾಡತೊಡಗಿದರು.

53ಯೇಸು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು
ಮನುಷ್ಯಕುಮಾರನ ದೇಹವನ್ನು ತಿನ್ನಲೇಬೇಕು. ಆತನ
ರಕ್ತವನ್ನು ಕುಡಿಯಲೇಬೇಕು. ನೀವು ಹೀಗೆ ಮಾಡದಿದ್ದರೆ,
ನಿಮ್ಮಲ್ಲಿ ನಿಜವಾದ ಜೀವ ಇರುವುದಿಲ್ಲ. 54ನನ್ನ ದೇಹವನ್ನು
ತಿಂದು ನನ್ನ ರಕ್ತವನ್ನು ಕುಡಿಯುವವನು ನಿತ್ಯಜೀವವನ್ನು
ಹೊಂದಿದ್ದಾನೆ. ಅಂತಿಮ ದಿನದಂದು ನಾನು ಆ ವ್ಯಕ್ತಿಯನ್ನು
ಜೀವಂತವಾಗಿ ಎಬ್ಬಿಸುವೆನು. 55ನನ್ನ ದೇಹವು ನಿಜವಾದ
ಆಹಾರವಾಗಿದೆ. ನನ್ನ ರಕ್ತವು ನಿಜವಾದ ಪಾನೀಯವಾಗಿದೆ.
56ನನ್ನ ದೇಹವನ್ನು ತಿಂದು ನನ್ನ ರಕ್ತವನ್ನು ಕುಡಿಯುವವನು
ನನ್ನಲ್ಲಿ ವಾಸಿಸುತ್ತಾನೆ. ನಾನು ಅವನಲ್ಲಿ ವಾಸಿಸುತ್ತೇನೆ.
57ತಂದೆಯೇ ನನ್ನನ್ನು ಕಳುಹಿಸಿದನು. ತಂದೆಯು ಜೀವಸ್ವರೂಪ
ನಾಗಿದ್ದಾನೆ. ನಾನು ತಂದೆಯಿಂದಲೇ ಜೀವಿಸುತ್ತೇನೆ. ಆದ್ದರಿಂದ
ನನ್ನನ್ನು ತಿನ್ನುವವನು ನನ್ನಿಂದಲೇ ಜೀವಿಸುವನು. 58ನಮ್ಮ
ಪಿತೃಗಳು ತಿಂದ ರೊಟ್ಟಿಯಂತಲ್ಲ ನಾನು. ಅವರು ಆ ರೊಟ್ಟಿ
ಯನ್ನು ತಿಂದರೂ ಎಲ್ಲಾ ಜನರಂತೆ ಸತ್ತುಹೋದರು. ನಾನು
ಪರಲೋಕದಿಂದ ಇಳಿದುಬಂದ ರೊಟ್ಟಿ. ಈ ರೊಟ್ಟಿಯನ್ನು
ತಿನ್ನುವವನು ಸದಾಕಾಲ ಜೀವಿಸುವನು,’’ ಎಂದು ಹೇಳಿದನು.
59ಯೇಸು ಕಪೆರ್ನೌಮಿನ ಸಭಾಮಂದಿರದಲ್ಲಿ ಉಪದೇಶಿಸು
ತ್ತಿದ್ದಾಗ ಈ ಸಂಗತಿಗಳನ್ನೆಲ್ಲಾ ಹೇಳಿದನು.

## ನಿತ್ಯಜೀವದ ನುಡಿಗಳು

60ಇದನ್ನು ಕೇಳಿದ ಆತನ ಶಿಷ್ಯರಲ್ಲಿ ಅನೇಕರು, ‘‘ಈ
ಉಪದೇಶವು ಕಠಿಣವಾಗಿದೆ. ಇದನ್ನು ಯಾರು ಗ್ರಹಿಸಿಕೊಳ್ಳ
ಬಲ್ಲರು?’’ ಎಂದರು. 61ತನ್ನ ಶಿಷ್ಯರು ಆಕ್ಷೇಪಿಸುತ್ತಿರುವುದನ್ನು
ತಿಳಿದಿದ್ದ ಯೇಸು, ‘‘ಈ ಉಪದೇಶದಿಂದ ನಿಮಗೆ ಬೇಸರ
ವಾಯಿತೇ? 62ಹಾಗಾದರೆ ಮನುಷ್ಯಕುಮಾರನು ತಾನು
ಬಿಟ್ಟುಬಂದ ಸ್ಥಳಕ್ಕೆ ಮರಳಿಹೋಗುವುದನ್ನು ನೀವು ನೋಡು
ವಾಗ ಬೇಸರಪಡುವಿರಾ? 63ಒಬ್ಬನಿಗೆ ಜೀವವನ್ನು ಕೊಡು
ವಂಥದ್ದು ದೈಹಿಕ ಸಂಗತಿಗಳಲ್ಲ. ಜೀವವನ್ನು ಕೊಡುವಂಥದ್ದು
ದೇವರಾತ್ಮ. ನಾನು ನಿಮಗೆ ಹೇಳಿದ ಸಂಗತಿಗಳು ಆತ್ಮಿಕ
ಸಂಗತಿಗಳಾಗಿವೆ. ಆದ್ದರಿಂದ ಈ ಸಂಗತಿಗಳೇ ಜೀವವನ್ನು
ಕೊಡುತ್ತವೆ. 64ಆದರೆ ನಿಮ್ಮಲ್ಲಿ ಕೆಲವರು ನಂಬುವುದಿಲ್ಲ’’
ಎಂದು ಹೇಳಿದನು. (ತನ್ನನ್ನು ಯಾರೂ ನಂಬಿಲ್ಲವೆಂದು
ಯೇಸುವಿಗೆ ತಿಳಿದಿತ್ತು. ಆತನಿಗೆ ಅದು ಮೊದಲಿನಿಂದಲೂ
ತಿಳಿದಿತ್ತು. ತನಗೆ ಯಾವ ವ್ಯಕ್ತಿ ದ್ರೋಹ ಮಾಡುತ್ತಾನೆ
ಎಂಬುದೂ ಆತನಿಗೆ ಗೊತ್ತಿತ್ತು.) 65ಯೇಸು, ‘‘ತಂದೆಯ
ಅನುಮತಿ ಇಲ್ಲದೆ ಯಾವನೂ ನನ್ನ ಬಳಿಗೆ ಬರಲಾರನು ಎಂದು
ನಾನು ನಿಮಗೆ ಹೇಳಿದ್ದಕ್ಕೆ ಅದೇ ಕಾರಣ’’ ಎಂದನು.

66ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ ಆತನ
ಹಿಂಬಾಲಕರಲ್ಲಿ ಅನೇಕರು ಆತನನ್ನು ತೊರೆದುಬಿಟ್ಟರು.
ಅವರು ಆತನನ್ನು ಹಿಂಬಾಲಿಸಲಿಲ್ಲ.

67ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರಿಗೆ, ‘‘ನೀವು ಸಹ
ನನ್ನನ್ನು ಬಿಟ್ಟುಹೋಗಬೇಕೆಂದಿರುವಿರಾ?’’ ಎಂದು
ಕೇಳಿದನು. 68ಸೀಮೋನ್ ಪೇತ್ರನು ಯೇಸುವಿಗೆ, ‘‘ಪ್ರಭುವೇ,
ನಾವೆಲ್ಲಿಗೆ ಹೋಗೋಣ? ನಿತ್ಯಜೀವವನ್ನು ಕೊಡುವ
ಸಂಗತಿಗಳು ನಿನ್ನಲ್ಲಿವೆ. 69ನಾವು ನಿನ್ನಲ್ಲಿ ನಂಬಿಕೆ ಇಡುತ್ತೇವೆ.
ನೀನು ದೇವರಿಂದ ಬಂದ ಪರಿಶುದ್ಧನೆಂದು ನಮಗೆ ಗೊತ್ತಿದೆ’’
ಎಂದು ಉತ್ತರಕೊಟ್ಟನು. 70ಬಳಿಕ ಯೇಸು, ‘‘ನಾನು
ಆರಿಸಿಕೊಂಡ ಹನ್ನೆರಡು ಮಂದಿ ನೀವೇ. ಆದರೆ ನಿಮ್ಮಲ್ಲಿರುವ
ಒಬ್ಬನು ಪಿಶಾಚಿಯಾಗಿದ್ದಾನೆ’’ ಎಂದು ಉತ್ತರಕೊಟ್ಟನು.

71ಯೇಸು ಸಿಮೋನನ ಮಗನಾದ ಇಸ್ಕರಿಯೋತ
ಯೂದನ ಬಗ್ಗೆ ಮಾತಾಡುತ್ತಿದ್ದನು. ಯೂದನು ಹನ್ನೆರಡು
ಮಂದಿ ಅಪೊಸ್ತಲರಲ್ಲಿ ಒಬ್ಬನಾಗಿದ್ದನು. ಆದರೆ ಮುಂದೆ
ಯೇಸುವಿಗೆ ದ್ರೋಹ ಮಾಡಿದ ವ್ಯಕ್ತಿ ಇವನೇ.

## ಯೇಸು ಮತ್ತು ಆತನ ಸಹೋದರರು

7 ಇದಾದ ಮೇಲೆ, ಯೇಸು ಗಲಿಲೇಯ ಪ್ರಾಂತ್ಯದಲ್ಲೆಲ್ಲಾ
ಸಂಚರಿಸಿದನು. ಜುದೇಯದಲ್ಲಿ ಸಂಚರಿಸಲು ಯೇಸು
ವಿಗೆ ಇಷ್ಟವಿರಲಿಲ್ಲ. ಏಕೆಂದರೆ ಅಲ್ಲಿನ ಯೆಹೂದ್ಯರು ಆತನನ್ನು
ಕೊಲ್ಲಲು ಅವಕಾಶಕ್ಕಾಗಿ ಕಾಯುತ್ತಿದ್ದರು. 2ಆಗ ಯೆಹೂದ್ಯರ
ಪರ್ಣಕುಟೀರಗಳ ಹಬ್ಬದ ಸಮಯವಾಗಿತ್ತು. 3ಆದ್ದರಿಂದ

---

**ದೇವರು … ಉಪದೇಶಿಸುವನು** ಯೆಶಾಯ 54:13.

ಯೇಸುವಿನ ಸಹೋದರರು ಆತನಿಗೆ, ‘‘ನೀನು ಇಲ್ಲಿಂದ
ಜುದೇಯಕ್ಕೆ ಹೋಗು. ಆಗ ಅಲ್ಲಿರುವ ನಿನ್ನ ಹಿಂಬಾಲಕರು
ನೀನು ಮಾಡುವ ಅದ್ಭುತಕಾರ್ಯಗಳನ್ನು ನೋಡುವರು. 4ತನ್ನ
ಬಗ್ಗೆ ಜನರಿಗೆ ತಿಳಿಯಬೇಕೆಂದು ಅಪೇಕ್ಷಿಸುವವನು ತಾನು
ಮಾಡುವ ಕಾರ್ಯಗಳನ್ನು ಮರೆಮಾಡಕೂಡದು. ನಿನ್ನನ್ನು ಈ
ಲೋಕಕ್ಕೆ ತೋರಿಸಿಕೊ. ನೀನು ಮಾಡುವ ಕಾರ್ಯಗಳನ್ನು
ಅವರು ನೋಡಲಿ’’ ಎಂದು ಹೇಳಿದರು. 5(ಯೇಸುವಿನ
ಸಹೋದರರು ಸಹ ಆತನನ್ನು ನಂಬಲಿಲ್ಲ.) 6ಯೇಸು ತನ್ನ
ಸಹೋದರರಿಗೆ, ‘‘ನನಗೆ ಸರಿಯಾದ ಸಮಯವು ಇನ್ನೂ
ಬಂದಿಲ್ಲ. ನಿಮಗಾದರೋ ಹೋಗಲು ಎಲ್ಲಾ ಸಮಯವೂ
ಸರಿಯಾಗಿರುತ್ತದೆ. 7ಈ ಲೋಕವು ನಿಮ್ಮನ್ನು ದ್ವೇಷಿಸಲಾರದು.
ಆದರೆ ಈ ಲೋಕವು ನನ್ನನ್ನು ದ್ವೇಷಿಸುತ್ತದೆ. ಏಕೆಂದರೆ ನಾನು
ಈ ಲೋಕದ ಜನರಿಗೆ, ಅವರು ಮಾಡುತ್ತಿರುವುದು ಕೆಟ್ಟ
ಕಾರ್ಯಗಳೆಂದು ಹೇಳುವೆನು. 8ಆದ್ದರಿಂದ ನೀವು ಹಬ್ಬಕ್ಕೆ
ಹೋಗಿರಿ. ನಾನು ಈ ಹಬ್ಬಕ್ಕೆ ಹೋಗುವುದಿಲ್ಲ. ನನಗೆ
ಸರಿಯಾದ ಸಮಯವು ಇನ್ನೂ ಬಂದಿಲ್ಲ’’ ಎಂದು ಹೇಳಿದನು.
9ಯೇಸು ಹೀಗೆ ಹೇಳಿ ಗಲಿಲೇಯದಲ್ಲೇ ಉಳಿದುಕೊಂಡನು.

10ಆದ್ದರಿಂದ ಯೇಸುವಿನ ಸಹೋದರರು ಹಬ್ಬಕ್ಕಾಗಿ
ಹೊರಟರು. ಅವರು ಹೋದನಂತರ ಆತನು ಸಹ ಗುಟ್ಟಾಗಿ
ಹೋದನು. 11ಹಬ್ಬದಲ್ಲಿ ಯೆಹೂದ್ಯರು, ‘‘ಆತನು ಎಲ್ಲಿದ್ದಾನೆ’’
ಎಂದು ಕೇಳುತ್ತಾ ಆತನಿಗಾಗಿ ಹುಡುಕುತ್ತಿದ್ದರು.

12ಅಲ್ಲಿ ಜನರ ದೊಡ್ಡ ಗುಂಪೊಂದು ನೆರೆದಿದ್ದಿತು. ಆ
ಜನರಲ್ಲಿ ಅನೇಕರು ಯೇಸುವಿನ ಬಗ್ಗೆ ಒಬ್ಬರಿಗೊಬ್ಬರು
ಮಾತಾಡಿಕೊಳ್ಳುತ್ತಿದ್ದರು. ‘‘ಆತನು ಒಳ್ಳೆಯವನು’’ ಎಂದು
ಕೆಲವರು ಹೇಳಿದರು. ಇತರರು, ‘‘ಇಲ್ಲ, ಆತನು ಜನರನ್ನು
ಮೋಸಗೊಳಿಸುತ್ತಿದ್ದಾನೆ’’ ಎಂದು ಟೀಕಿಸಿದರು. 13ಆದರೆ
ಯೇಸುವಿನ ಬಗ್ಗೆ ಬಹಿರಂಗವಾಗಿ ಮಾತಾಡಲು ಆ ಜನರಲ್ಲಿ
ಯಾರಿಗೂ ಸಾಕಷ್ಟು ಧೈರ್ಯವಿರಲಿಲ್ಲ. ಜನರು ಯೆಹೂದ್ಯ
ನಾಯಕರುಗಳಿಗೆ ಹೆದರಿಕೊಂಡಿದ್ದರು.

### ಯೆಹೂದ್ಯರ ಹಬ್ಬದಲ್ಲಿ ಯೇಸುವಿನ ಉಪದೇಶ

14ಹಬ್ಬದಲ್ಲಿ ಸುಮಾರು ಅರ್ಧಭಾಗ ಮುಗಿದು ಹೋಗಿತ್ತು,
ಆಗ ಯೇಸು ದೇವಾಲಯಕ್ಕೆ ಹೋಗಿ ಉಪದೇಶಿಸಲು
ಆರಂಭಿಸಿದನು. 15ಯೆಹೂದ್ಯರಿಗೆ ಆಶ್ಚರ್ಯವಾಯಿತು. ‘‘ಈ
ಮನುಷ್ಯನು ಎಂದೂ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಲಿಲ್ಲ.
ಇವನು ಇಷ್ಟೆಲ್ಲವನ್ನೂ ಹೇಗೆ ಕಲಿತನು?’’ ಎಂದು ವಿಚಾರಿಸ
ತೊಡಗಿದರು.

16ಯೇಸು, ‘‘ನಾನು ಉಪದೇಶಿಸುವ ಸಂಗತಿಗಳು ನನ್ನ
ಸ್ವಂತವಾದವುಗಳಲ್ಲ. ನನ್ನ ಉಪದೇಶವು ನನ್ನನ್ನು ಕಳುಹಿಸಿ
ದಾತನಿಂದ (ದೇವರು) ಬರುತ್ತದೆ. 17ದೇವರು ಅಪೇಕ್ಷಿಸು
ವುದನ್ನು ಮಾಡಬಯಸುವವನಿಗೆ ನನ್ನ ಉಪದೇಶವು ದೇವ
ರಿಂದ ಬಂದದ್ದೇ ಹೊರತು ನನ್ನ ಸ್ವಂತದ್ದಲ್ಲವೆಂದು ಗೊತ್ತಾಗು
ವುದು. 18ತನ್ನ ಸ್ವಂತ ಆಲೋಚನೆಗಳನ್ನು ಉಪದೇಶಿಸುವವನು,
ತನಗೇ ಘನತೆಯನ್ನು ಉಂಟುಮಾಡಿಕೊಳ್ಳಲು ಪ್ರಯತ್ನಿಸು
ತ್ತಾನೆ. ಆದರೆ ತನ್ನನ್ನು ಕಳುಹಿಸಿದಾತನಿಗೆ ಘನತೆಯನ್ನು ಉಂಟು
ಮಾಡಲು ಪ್ರಯತ್ನಿಸುವವನು ಸತ್ಯವನ್ನೇ ಹೇಳುತ್ತಾನೆ. ಆತನಲ್ಲಿ
ಯಾವ ಸುಳ್ಳೂ ಇಲ್ಲ. 19ಮೋಶೆಯು ನಿಮಗೆ ಧರ್ಮಶಾಸ್ತ್ರವನ್ನು
ಕೊಟ್ಟನು. ಹೌದಲ್ಲವೇ? ಆದರೆ ನಿಮ್ಮಲ್ಲಿ ಒಬ್ಬರೂ ಧರ್ಮ
ಶಾಸ್ತ್ರಕ್ಕೆ ವಿಧೇಯರಾಗುತ್ತಿಲ್ಲ. ನೀವು ನನ್ನನ್ನು ಕೊಲ್ಲಲು ಏಕೆ
ಪ್ರಯತ್ನಿಸುತ್ತಿದ್ದೀರಿ?’’ ಎಂದು ಉತ್ತರಕೊಟ್ಟನು.

20ಜನರು, ‘‘ದೆವ್ವವು ನಿನ್ನೊಳಗೆ ಸೇರಿಕೊಂಡು ನಿನ್ನನ್ನು
ಹುಚ್ಚನನ್ನಾಗಿ ಮಾಡಿದೆ! ನಾವು ನಿನ್ನನ್ನು ಕೊಲ್ಲಲು ಪ್ರಯತ್ನಿಸು
ತ್ತಿಲ್ಲ’’ ಎಂದು ಉತ್ತರಕೊಟ್ಟರು.

21ಯೇಸು ಅವರಿಗೆ, ‘‘ನಾನು ಮಾಡಿದ ಒಂದು
ಅದ್ಭುತಕಾರ್ಯವನ್ನು ಕಂಡು ನೀವೆಲ್ಲರೂ ಆಶ್ಚರ್ಯ
ಗೊಂಡಿದ್ದೀರಿ. 22ಮೋಶೆಯು ನಿಮಗೆ ಸುನ್ನತಿಯ ಬಗ್ಗೆ
ಕಟ್ಟಳೆಯನ್ನು ಕೊಟ್ಟನು. (ಆದರೆ ನಿಜವಾಗಿಯೂ ಸುನ್ನತಿ ಎಂಬ
ಸಂಸ್ಕಾರವನ್ನು ನಿಮಗೆ ಕೊಟ್ಟವನು ಮೋಶೆಯಲ್ಲ. ಅವನಿಗಿಂತ
ಮೊದಲೇ ಜೀವಿಸಿದ್ದ ನಮ್ಮ ಜನರಿಂದ ಈ ಸಂಸ್ಕಾರವು
ಬಂದಿದೆ.) ಆದ್ದರಿಂದ ಕೆಲವೊಮ್ಮೆ ನೀವು ಸಬ್ಬತ್ ದಿನದಲ್ಲಿ
ಮಗುವಿಗೆ ಸುನ್ನತಿ ಮಾಡುತ್ತೀರಿ. 23ಒಬ್ಬ ವ್ಯಕ್ತಿಯು ಮೋಶೆಯ
ಕಟ್ಟಳೆಗೆ ವಿಧೇಯನಾಗುವುದಕ್ಕಾಗಿ ಸಬ್ಬತ್ ದಿನದಂದು ಸುನ್ನತಿ
ಮಾಡಬಹುದು ಎಂಬುದನ್ನು ಇದು ತೋರಿಸುತ್ತದೆ. ಹೀಗಿರು
ವಲ್ಲಿ, ಸಬ್ಬತ್ ದಿನದಂದು ಒಬ್ಬನ ಇಡೀ ದೇಹವನ್ನು ಗುಣಪಡಿಸಿ
ದ್ದಕ್ಕೋಸ್ಕರ ನೀವು ಏಕೆ ಕೋಪಗೊಂಡಿದ್ದೀರಿ? 24ಹೊರ
ತೋರಿಕೆಯ ಆಧಾರದ ಮೇಲೆ ತೀರ್ಪುಮಾಡದೆ ನ್ಯಾಯಾನು
ಸಾರವಾಗಿ ತೀರ್ಪುಮಾಡಿರಿ’’ ಎಂದು ಹೇಳಿದನು.

### ಯೇಸುವೇ ಕ್ರಿಸ್ತನೋ?

25ಬಳಿಕ, ಜೆರುಸಲೇಮಿನಲ್ಲಿ ವಾಸವಾಗಿದ್ದ ಕೆಲವರು,
‘‘ಅವರು ಕೊಲ್ಲಲು ಪ್ರಯತ್ನಿಸುತ್ತಿರುವುದು ಈ ವ್ಯಕ್ತಿಯನ್ನೇ.
26ಆದರೆ ಇವನು ಪ್ರತಿಯೊಬ್ಬರಿಗೂ ಕಾಣುವ ಮತ್ತು ಕೇಳುವ
ಸ್ಥಳದಲ್ಲಿ ಉಪದೇಶಿಸುತ್ತಿದ್ದಾನೆ. ಅಲ್ಲದೆ ಉಪದೇಶ ಮಾಡ
ದಂತೆ ಯಾರೂ ಅವನನ್ನು ತಡೆಯುತ್ತಿಲ್ಲ. ಒಂದುವೇಳೆ ಈತನೇ
ಕ್ರಿಸ್ತನು ಎಂಬ ನಿರ್ಧಾರಕ್ಕೆ ನಾಯಕರುಗಳು ಬಂದಿರಬಹುದು.
27ಆದರೆ ಈ ಮನುಷ್ಯನ ಮನೆಯು ಎಲ್ಲಿದೆ ಎಂಬುದು ನಮಗೆ
ಗೊತ್ತಿದೆ. ಅಲ್ಲದೆ, ಕ್ರಿಸ್ತನು ಬಂದಾಗ, ಆತನು ಎಲ್ಲಿಂದ ಬಂದ
ನೆಂದು ಯಾರಿಗೂ ತಿಳಿಯುವುದಿಲ್ಲ’’ ಎಂದು ಮಾತಾಡಿ
ಕೊಂಡರು. 28ಯೇಸುವು ದೇವಾಲಯದಲ್ಲಿ ಇನ್ನೂ
ಉಪದೇಶಿಸುತ್ತಾ, ‘‘ಹೌದು, ನಿಮಗೆ ನನ್ನ ಬಗ್ಗೆ ಗೊತ್ತಿದೆ, ನಾನು
ಎಲ್ಲಿಂದ ಬಂದೆನೆಂಬುದೂ ನಿಮಗೆ ತಿಳಿದಿದೆ. ಆದರೆ ನಾನು
ಬಂದಿರುವುದು ನನ್ನ ಸ್ವಂತ ಅಧಿಕಾರದಿಂದಲ್ಲ. ಸತ್ಯಸ್ವರೂಪನು
ನನ್ನನ್ನು ಕಳುಹಿಸಿದ್ದಾನೆ. ನಿಮಗೆ ಆತನು ಗೊತ್ತಿಲ್ಲ. 29ಆದರೆ
ನಾನು ಆತನನ್ನು ಬಲ್ಲೆನು. ನಾನು ಆತನಿಂದಲೇ ಬಂದೆನು.
ಮತ್ತು ಆತನೇ ನನ್ನನ್ನು ಕಳುಹಿಸಿದನು’’ ಎಂದು ಗಟ್ಟಿಯಾಗಿ
ಕೂಗಿ ಹೇಳಿದನು. 30ಇದನ್ನು ಕೇಳಿ ಜನರು ಆತನನ್ನು
ಬಂಧಿಸಲು ಪ್ರಯತ್ನಿಸಿದರು. ಆದರೆ ಯೇಸುವಿನ ಮೇಲೆ
ಕೈಹಾಕಲು ಯಾರಿಗೂ ಸಾಧ್ಯವಿರಲಿಲ್ಲ, ಏಕೆಂದರೆ ಯೇಸುವನ್ನು
ಕೊಲ್ಲಲು ಇನ್ನೂ ಸರಿಯಾದ ಸಮಯ ಬಂದಿರಲಿಲ್ಲ. 31ಆದರೆ
ಅನೇಕರು ಯೇಸುವಿನಲ್ಲಿ ನಂಬಿಕೆ ಇಟ್ಟರು. ‘‘ಕ್ರಿಸ್ತನು ಬರುತ್ತಾ
ನೆಂದು ನಾವು ಎದುರುನೋಡುತ್ತಿದ್ದೇವೆ. ಕ್ರಿಸ್ತನು ಬಂದಾಗ,
ಈ ಮನುಷ್ಯನು (ಯೇಸು) ಮಾಡಿರುವುದಕ್ಕಿಂತಲೂ ಹೆಚ್ಚು
ಸೂಚಕಕಾರ್ಯಗಳನ್ನು ಮಾಡುವನೇ? ಇಲ್ಲ! ಆದ್ದರಿಂದ
ಈತನೇ ಕ್ರಿಸ್ತನಿರಬೇಕು’’ ಎಂದರು.

## ಯೇಸುವನ್ನು ಬಂಧಿಸಲು ಯೆಹೂದ್ಯರ ಪ್ರಯತ್ನ

32 ಯೇಸುವಿನ ಬಗ್ಗೆ ಜನರು ಹೇಳುತ್ತಿದ್ದ ಈ ಸಂಗತಿಗಳನ್ನು
ಫರಿಸಾಯರು ಕೇಳಿದರು. ಆದ್ದರಿಂದ ಮಹಾಯಾಜಕರು
ಮತ್ತು ಫರಿಸಾಯರು ಯೇಸುವನ್ನು ಬಂಧಿಸುವುದಕ್ಕಾಗಿ
ದೇವಾಲಯದ ಸಿಪಾಯಿಗಳಲ್ಲಿ ಕೆಲವರನ್ನು ಕಳುಹಿಸಿದರು.
33 ಆಗ ಯೇಸು, ‘‘ಇನ್ನು ಸ್ವಲ್ಪಕಾಲ ನಾನು ನಿಮ್ಮೊಂದಿಗಿರು
ತ್ತೇನೆ. ಬಳಿಕ, ನನ್ನನ್ನು ಕಳುಹಿಸಿದಾತನ ಬಳಿಗೆ ನಾನು ಹಿಂತಿರುಗಿ
ಹೋಗುತ್ತೇನೆ. 34 ನೀವು ನನ್ನನ್ನು ಹುಡುಕುವಿರಿ, ಆದರೆ ನೀವು
ನನ್ನನ್ನು ಕಂಡುಕೊಳ್ಳುವುದಿಲ್ಲ ಮತ್ತು ನಾನಿರುವಲ್ಲಿಗೆ ನೀವು
ಬರಲಾರಿರಿ’’ ಎಂದು ಹೇಳಿದನು.
35 ಯೆಹೂದ್ಯರು, ‘‘ಇವನನ್ನು ನಾವು ಕಂಡುಕೊಳ್ಳ
ಲಾಗದಂತೆ ಇವನು ಎಲ್ಲಿಗೆ ಹೋಗುವನು? ನಮ್ಮವರು
ವಾಸವಾಗಿರುವ ಗ್ರೀಕ್ ಜನರ ಪಟ್ಟಣಗಳಿಗೆ ಹೋಗಿ ಗ್ರೀಕರಿಗೆ
ಉಪದೇಶಿಸುವನೇ? 36 ಇವನು (ಯೇಸು), ‘ನೀವು ನನ್ನನ್ನು
ಹುಡುಕುವಿರಿ, ಆದರೆ ನೀವು ನನ್ನನ್ನು ಕಂಡುಕೊಳ್ಳುವುದಿಲ್ಲ’
ಎನ್ನುತ್ತಾನೆ. ಅಲ್ಲದೆ ಇವನು, ‘ನಾನು ಇರುವಲ್ಲಿಗೆ ನೀವು
ಬರಲಾರಿರಿ’ ಎನ್ನುತ್ತಾನೆ. ಇದರರ್ಥವೇನು?’’ ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು.

## ಪವಿತ್ರಾತ್ಮನ ಬಗ್ಗೆ ಉಪದೇಶ

37 ಹಬ್ಬದ ಕೊನೆಯ ದಿನ ಬಂದಿತು. ಅದು ಅತ್ಯಂತ
ಮುಖ್ಯವಾದ ದಿನವಾಗಿತ್ತು. ಅಂದು ಯೇಸು ನಿಂತುಕೊಂಡು,
‘‘ಯಾವನಿಗಾದರೂ ಬಾಯಾರಿಕೆಯಾಗಿದ್ದರೆ ಅವನು ನನ್ನ
ಬಳಿಗೆ ಬಂದು ಕುಡಿಯಲಿ. 38 ನನ್ನಲ್ಲಿ ನಂಬಿಕೆ ಇಡುವವನ
ಹೃದಯದಿಂದ ಜೀವಕರವಾದ ನೀರಿನ ಹೊಳೆಗಳು ಹರಿಯು
ತ್ತವೆ. ಪವಿತ್ರ ಗ್ರಂಥವು ತಿಳಿಸುವುದು ಇದನ್ನೇ’’ ಎಂದು
ಗಟ್ಟಿಯಾಗಿ ಹೇಳಿದನು. 39 ಯೇಸು ತನ್ನನ್ನು ನಂಬಿದವರು
ಹೊಂದಲಿರುವ ಪವಿತ್ರಾತ್ಮನನ್ನು ಕುರಿತು ಹೇಳಿದನು. ಆತನು
ಇನ್ನೂ ತನ್ನ ಮಹಿಮೆಯನ್ನು ಹೊಂದಿಲ್ಲದಿದ್ದ ಕಾರಣ
ಪವಿತ್ರಾತ್ಮನು ಇನ್ನೂ ಬಂದಿರಲಿಲ್ಲ.

## ಯೇಸುವಿನ ಬಗ್ಗೆ ಜನರ ವಾದವಿವಾದ

40 ಈ ಸಂಗತಿಗಳನ್ನು ಕೇಳಿದ ಜನರಲ್ಲಿ ಕೆಲವರು, ‘‘ಈ
ಮನುಷ್ಯನು ನಿಜವಾಗಿಯೂ ಪ್ರವಾದಿ’’ ಎಂದರು.
42 ‘‘ಆತನೇ ಕ್ರಿಸ್ತನು’’ ಎಂದು ಇನ್ನು ಕೆಲವರು ಹೇಳಿದರು.
ಮತ್ತೆ ಕೆಲವರು, ‘‘ಕ್ರಿಸ್ತನು ಗಲಿಲೇಯದಿಂದ ಬರುವುದಿಲ್ಲ.
42 ಕ್ರಿಸ್ತನು ದಾವೀದನ ಕುಟುಂಬದವನೆಂತಲೂ ದಾವೀದನು
ವಾಸಿಸಿದ ಬೆತ್ಲೆಹೇಮ್ ಊರಿನಿಂದ ಆತನು ಬರುತ್ತಾನೆಂತಲೂ
ಪವಿತ್ರ ಗ್ರಂಥವು ತಿಳಿಸುತ್ತದೆ’’ ಎಂದರು. 43 ಹೀಗೆ ಯೇಸುವಿನ
ಕುರಿತು ಜನರಲ್ಲಿ ಭೇದ ಉಂಟಾಯಿತು. 44 ಕೆಲವರು ಯೇಸು
ವನ್ನು ಬಂಧಿಸಬೇಕೆಂದಿದ್ದರು. ಆದರೆ ಬಂಧಿಸಲು ಯಾರೂ
ಪ್ರಯತ್ನಿಸಲಿಲ್ಲ

## ಯೆಹೂದ್ಯನಾಯಕರ ಅಪನಂಬಿಕೆ

45 ದೇವಾಲಯದ ಸಿಪಾಯಿಗಳು ಹಿಂತಿರುಗಿದಾಗ,
ಮಹಾಯಾಜಕರು ಮತ್ತು ಫರಿಸಾಯರು ಅವರಿಗೆ, ‘‘ನೀವು
ಅವನನ್ನು ಏಕೆ ಹಿಡಿದುಕೊಂಡು ಬರಲಿಲ್ಲ?’’ ಎಂದು
ಕೇಳಿದರು.
46 ದೇವಾಲಯದ ಸಿಪಾಯಿಗಳು, ‘‘ಆತನು ಹೇಳುವ
ಸಂಗತಿಗಳು ಬೇರೆ ಯಾವ ಮನುಷ್ಯನ ಮಾತುಗಳಿಗಿಂತಲೂ
ಮಹತ್ವಪೂರ್ಣವಾಗಿವೆ’’ ಎಂದು ಉತ್ತರಕೊಟ್ಟರು.
47 ಫರಿಸಾಯರು, ‘‘ಹಾಗಾದರೆ, ಯೇಸು ನಿಮ್ಮನ್ನು ಸಹ
ಮರುಳುಗೊಳಿಸುತ್ತಿದ್ದಾನೆ! 48 ನಾಯಕರಲ್ಲಿ ಯಾರಾದರೂ
ಯೇಸುವಿನಲ್ಲಿ ನಂಬಿಕೆ ಇಟ್ಟಿದ್ದಾರೋ? ಇಲ್ಲ! ಫರಿಸಾಯರಾದ
ನಮ್ಮಲ್ಲಿ ಯಾರಾದರೂ ಅತನನ್ನು ನಂಬಿದ್ದೇವೋ? ಇಲ್ಲ!
49 ಆದರೆ ಹೊರಗಿನ ಜನರಿಗೆ ಧರ್ಮಶಾಸ್ತ್ರದ ಬಗ್ಗೆ ಏನೂ
ಗೊತ್ತಿಲ್ಲ. ಅವರು ದೇವರ ಶಾಪಕ್ಕೆ ಒಳಗಾಗಿದ್ದಾರೆ!’’ ಎಂದು
ಉತ್ತರಕೊಟ್ಟರು.
50 ಆದರೆ ಆ ಗುಂಪಿನಲ್ಲಿ ನಿಕೊದೇಮನು ಇದ್ದನು.
ಮೊದಲೊಮ್ಮೆ ಯೇಸುವನ್ನು ನೋಡಲು ಹೋಗಿದ್ದವನು
ಇವನೇ. 51 ನಿಕೊದೇಮನು, ‘‘ಒಬ್ಬ ವ್ಯಕ್ತಿಯ ಹೇಳಿಕೆಯನ್ನು
ಕೇಳದೆ ತೀರ್ಪು ನೀಡಲು ನಮ್ಮ ಧರ್ಮಶಾಸ್ತ್ರವು ಸಮ್ಮತಿಸು
ವುದಿಲ್ಲ. ಆತನು ಮಾಡಿರುವುದನ್ನು ನಾವು ತಿಳಿದುಕೊಳ್ಳು
ವವರೆಗೆ ಆತನಿಗೆ ತೀರ್ಪು ಮಾಡಲಾಗದು’’ ಎಂದು ಹೇಳಿದನು.
52 ಯೆಹೂದ್ಯನಾಯಕರು, ‘‘ನೀನೂ ಗಲಿಲೇಯ
ದವನೋ? ಪವಿತ್ರ ಗ್ರಂಥವನ್ನು ಅಧ್ಯಯನಮಾಡು.
ಗಲಿಲೇಯದಿಂದ ಯಾವ ಪ್ರವಾದಿಯೂ ಬರುವುದಿಲ್ಲ
ವೆಂಬುದು ಆಗ ನಿನಗೆ ತಿಳಿಯುತ್ತದೆ’’ ಎಂದು ಉತ್ತರಕೊಟ್ಟರು.

## ಸಿಕ್ಕಿಕೊಂಡ ವ್ಯಭಿಚಾರಿಣಿ

53 ಬಳಿಕ ಅವರೆಲ್ಲರೂ ತಮ್ಮತಮ್ಮ ಮನೆಗಳಿಗೆ
ಹೊರಟುಹೋದರು.
8 ಯೇಸು ಆಲಿವ್ ಮರಗಳ ಗುಡ್ಡಕ್ಕೆ ಹೋದನು.
2 ಮರುದಿನ ನಸುಕಿನಲ್ಲಿ ಯೇಸು ದೇವಾಲಯಕ್ಕೆ ಮರಳಿ
ಹೋದನು. ಎಲ್ಲಾ ಜನರು ಯೇಸುವಿನ ಬಳಿಗೆ ನೆರೆದು
ಬಂದರು. ಯೇಸು ಕುಳಿತುಕೊಂಡು ಜನರಿಗೆ ಉಪದೇಶಿಸಿ
ದನು. 3 ಧರ್ಮೋಪದೇಶಕರು ಮತ್ತು ಫರಿಸಾಯರು ಒಬ್ಬ
ಸ್ತ್ರೀಯನ್ನು ಅಲ್ಲಿಗೆ ಕರೆದುಕೊಂಡು ಬಂದರು. ಆ ಸ್ತ್ರೀಯು
ವ್ಯಭಿಚಾರ ಮಾಡುವಾಗಲೇ ಸಿಕ್ಕಿಕೊಂಡಿದ್ದಳು. ಈ ಯೆಹೂ
ದ್ಯರು ಆ ಸ್ತ್ರೀಯನ್ನು ಜನರ ಮುಂದೆ ಬಲವಂತವಾಗಿ ನಿಲ್ಲಿಸಿ,
4 ಯೇಸುವಿಗೆ, ‘‘ಉಪದೇಶಕನೇ, ಈ ಸ್ತ್ರೀಯು ವ್ಯಭಿಚಾರ
ಮಾಡುತ್ತಿದ್ದಾಗಲೇ ಸಿಕ್ಕಿಕೊಂಡಳು. 5 ಇಂಥ ಕಾರ್ಯವನ್ನು
ಮಾಡುವ ಪ್ರತಿಯೊಬ್ಬ ಸ್ತ್ರೀಯನ್ನು ಕಲ್ಲೆಸೆದು ಕೊಲ್ಲಬೇಕೆಂದು
ಮೋಶೆಯ ಧರ್ಮಶಾಸ್ತ್ರವು ಆಜ್ಞಾಪಿಸುತ್ತದೆ. ಈಗ ನಾವೇನು
ಮಾಡಬೇಕು? ನೀನೇ ಹೇಳು’’ ಎಂದರು. 6 ಯೇಸುವನ್ನು
ಮಾತಿನಲ್ಲಿ ಸಿಕ್ಕಿಸಿದರೆ ಆತನ ಮೇಲೆ ಅಪವಾದ ಹೊರಿಸಲು
ಸಾಧ್ಯವಾಗುತ್ತದೆ ಎಂದು ಈ ಪ್ರಶ್ನೆಯನ್ನು ಕೇಳಿದರು. ಆದರೆ
ಯೇಸು ತಲೆ ಬಾಗಿಸಿಕೊಂಡು ತನ್ನ ಬೆರಳಿನಿಂದ ನೆಲದ ಮೇಲೆ
ಬರೆಯತೊಡಗಿದನು. 7 ಯೆಹೂದ್ಯನಾಯಕರು ಅದೇ ಪ್ರಶ್ನೆ
ಯನ್ನು ಮತ್ತೆ ಕೇಳಿದರು. ಆಗ ಯೇಸು ನೆಟ್ಟಗೆ ಕುಳಿತುಕೊಂಡು,
‘‘ನಿಮ್ಮಲ್ಲಿ ಪಾಪ ಮಾಡಿಲ್ಲದವನು ಆಕೆಯ ಮೇಲೆ ಮೊದಲ
ನೆಯ ಕಲ್ಲನ್ನು ಎಸೆಯಲಿ’’ ಎಂದು ಹೇಳಿ, 8 ಮತ್ತೆ ಬಗ್ಗಿಕೊಂಡು
ನೆಲದ ಮೇಲೆ ಬರೆಯತೊಡಗಿದನು.
9 ಯೇಸುವಿನ ಈ ಮಾತನ್ನು ಕೇಳಿದ ಆ ಜನರು
ಒಬ್ಬೊಬ್ಬರಾಗಿ ಅಲ್ಲಿಂದ ಹೊರಟುಹೋದರು. ಮೊದಲಾಗಿ

ಹಿರಿಯರು, ನಂತರ ಇತರರು ಹೊರಟುಹೋದರು. ಕೊನೆಗೆ ಅಲ್ಲಿ ಉಳಿದವರೆಂದರೆ, ಯೇಸು ಮತ್ತು ಆ ಸ್ತ್ರೀ. ಆಕೆಯು ಆತನ ಮುಂದೆ ನಿಂತುಕೊಂಡಿದ್ದಳು.
10ಯೇಸು ನೆಟ್ಟಗೆ ಕುಳಿತು ಕೊಂಡು, 'ಅಮ್ಮಾ, ನಿನ್ನ ಮೇಲೆ ತಪ್ಪು ಹೊರಿಸಿದವರು ಎಲ್ಲಿದ್ದಾರೆ? ಅವರಲ್ಲಿ ಒಬ್ಬರಾದರೂ ನಿನಗೆ ಶಿಕ್ಷೆ ವಿಧಿಸಲಿಲ್ಲವೇ?'' ಎಂದು ಕೇಳಿದನು.
11ಆ ಸ್ತ್ರೀಯು, ''ಸ್ವಾಮೀ, ಅವರಲ್ಲಿ ಯಾರೂ ನನಗೆ ತೀರ್ಪು ನೀಡಲಿಲ್ಲ'' ಎಂದು ಉತ್ತರ ಕೊಟ್ಟಳು.

ಯೇಸು ಆಕೆಗೆ, ''ಆದ್ದರಿಂದ ನಾನು ಸಹ ನಿನಗೆ ತೀರ್ಪು ನೀಡುವುದಿಲ್ಲ. ಈಗ ನೀನು ಹೋಗಬಹುದು, ಆದರೆ ಇನ್ನು ಮುಂದೆ ಮತ್ತೆ ಪಾಪ ಮಾಡಬೇಡ'' ಎಂದು ಹೇಳಿದನು.

### ಯೇಸುವೇ ಲೋಕಕ್ಕೆ ಬೆಳಕು

12ಬಳಿಕ, ಯೇಸುವು ಜನರೊಂದಿಗೆ ಮತ್ತೆ ಮಾತಾಡುತ್ತಾ ''ನಾನೇ ಈ ಲೋಕಕ್ಕೆ ಬೆಳಕಾಗಿದ್ದೇನೆ. ನನ್ನನ್ನು ಹಿಂಬಾಲಿಸುವವನು ಕತ್ತಲೆಯಲ್ಲಿ ಎಂದಿಗೂ ಜೀವಿಸುವುದಿಲ್ಲ. ಅವನು ಜೀವಕೊಡುವ ಬೆಳಕನ್ನು ಹೊಂದಿದವನಾಗಿರುವನು'' ಎಂದು ಹೇಳಿದನು.
13ಫರಿಸಾಯರು ಯೇಸುವಿಗೆ, ''ನೀನು ನಿನ್ನ ಬಗ್ಗೆ ಮಾತಾಡುವ ಈ ಸಂಗತಿಗಳು ಸತ್ಯವೆಂದು ಹೇಳುವವನು ನೀನೊಬ್ಬನು ಮಾತ್ರ. ಆದ್ದರಿಂದ, ನೀನು ಹೇಳುವ ಈ ಸಂಗತಿಗಳನ್ನು ನಾವು ಸ್ವೀಕರಿಸಿಕೊಳ್ಳಲಾರೆವು'' ಎಂದು ಹೇಳಿದರು.
14ಯೇಸು, ''ಹೌದು, ನಾನೇ ನನ್ನ ಬಗ್ಗೆ ಈ ಸಂಗತಿಗಳನ್ನು ಹೇಳುತ್ತಿದ್ದರೂ ಈ ಸಂಗತಿಗಳು ಜನರ ನಂಬಿಕೆಗೆ ಯೋಗ್ಯವಾಗಿವೆ. ಏಕೆಂದರೆ, ನಾನು ಎಲ್ಲಿಂದ ಬಂದೆನೆಂಬುದೂ ನಾನು ಎಲ್ಲಿಗೆ ಹೋಗುತ್ತೇನೆಂಬುದೂ ನನಗೆ ತಿಳಿದಿದೆ. ನಾನು ನಿಮ್ಮಂಥ ವ್ಯಕ್ತಿಯಲ್ಲ. ನಾನು ಎಲ್ಲಿಂದ ಬಂದೆನೆಂಬುದು ಮತ್ತು ಎಲ್ಲಿಗೆ ಹೋಗುತ್ತೇನೆಂಬುದು ನಿಮಗೆ ಗೊತ್ತಿಲ್ಲ.
15ನೀವು ಹೊರತೋರಿಕೆಯ ಪ್ರಕಾರ ತೀರ್ಪು ಮಾಡುತ್ತಿದ್ದೀರಿ. ಆದರೆ ನಾನು ಯಾರಿಗೂ ತೀರ್ಪು ಮಾಡುವುದಿಲ್ಲ.
16ನಾನು ಮಾಡುವ ತೀರ್ಪು ನ್ಯಾಯಬದ್ಧವಾಗಿರುತ್ತದೆ. ಏಕೆಂದರೆ ನಾನು ತೀರ್ಪು ಮಾಡುವಾಗ ಒಬ್ಬಂಟಿಗನಾಗಿರುವುದಿಲ್ಲ. ನನ್ನನ್ನು ಕಳುಹಿಸಿದ ತಂದೆಯೂ ನನ್ನೊಂದಿಗಿರುತ್ತಾನೆ.
17ಇಬ್ಬರ ಸಾಕ್ಷಿ ಒಂದೇ ಆಗಿದ್ದರೆ ಅವರ ಹೇಳಿಕೆಯನ್ನು ಸ್ವೀಕರಿಸಿಕೊಳ್ಳಬೇಕೆಂದು ನಿಮ್ಮ ಧರ್ಮಶಾಸ್ತ್ರವೇ ತಿಳಿಸುತ್ತದೆ.
18ನನ್ನ ಪರವಾದ ಸಾಕ್ಷಿಗಳಲ್ಲಿ ನಾನೂ ಒಬ್ಬನಾಗಿದ್ದೇನೆ, ನನ್ನನ್ನು ಕಳುಹಿಸಿದ ತಂದೆಯು ನನ್ನ ಮತ್ತೊಬ್ಬ ಸಾಕ್ಷಿಯಾಗಿದ್ದಾನೆ'' ಎಂದು ಉತ್ತರಕೊಟ್ಟನು.
19ಜನರು, ''ನಿನ್ನ ತಂದೆ ಎಲ್ಲಿದ್ದಾನೆ?'' ಎಂದು ಕೇಳಿದರು.

ಯೇಸು, ''ನಿಮಗೆ ನಾನಾಗಲಿ, ನನ್ನ ತಂದೆಯಾಗಲಿ ಗೊತ್ತಿಲ್ಲ. ನೀವು ನನ್ನನ್ನು ತಿಳಿದಿದ್ದರೆ, ನನ್ನ ತಂದೆಯನ್ನೂ ಸಹ ತಿಳಿದಿರುವಿರಿ'' ಎಂದು ಹೇಳಿದನು.
20ಯೇಸುವು ದೇವಾಲಯದಲ್ಲಿ ಉಪದೇಶಿಸುತ್ತಿದ್ದಾಗ ಈ ಮಾತುಗಳನ್ನು ಹೇಳಿದನು. ಜನರು ಕೊಡುವ ಕಾಣಿಕೆಯನ್ನು ಇಟ್ಟಿದ್ದ ಸ್ಥಳದ ಸಮೀಪದಲ್ಲಿ ಆತನಿದ್ದನು. ಆದರೆ ಆತನನ್ನು ಯಾರೂ ಬಂಧಿಸಲಿಲ್ಲ. ಏಕೆಂದರೆ ಆತನನ್ನು ಬಂಧಿಸತಕ್ಕ ಸಮಯ ಇನ್ನೂ ಬಂದಿರಲಿಲ್ಲ.

### ಯೆಹೂದ್ಯರ ಅಪನಂಬಿಕೆ

21ಯೇಸು ಅವರಿಗೆ, ''ನಾನು ನಿಮ್ಮನ್ನು ಬಿಟ್ಟುಹೋಗುತ್ತೇನೆ. ನೀವು ನನ್ನನ್ನು ಹುಡುಕುವಿರಿ. ಆದರೆ ನೀವು ನಿಮ್ಮ ಪಾಪದಲ್ಲೇ ಸಾಯುವಿರಿ. ನಾನು ಹೋಗುವಲ್ಲಿಗೆ ನೀವು ಬರಲಾರಿರಿ'' ಎಂದು ಹೇಳಿದನು.
22ಆದ್ದರಿಂದ ಯೆಹೂದ್ಯರು, ''ಯೇಸು ತನ್ನನ್ನು ತಾನೇ ಕೊಂದುಕೊಳ್ಳುವನೇ? ಅದಕ್ಕಾಗಿಯೇ, ನಾನು ಹೋಗುವಲ್ಲಿಗೆ ನೀವು ಬರಲಾರಿರಿ ಎಂದು ಹೇಳಿದನೇ?'' ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡರು.
23ಅದಕ್ಕೆ ಯೇಸು, ''ನೀವು ಕೆಳಗಿನವರಾಗಿದ್ದೀರಿ. ನಾನಾದರೋ ಮೇಲಿನವನು. ನೀವು ಈ ಲೋಕದವರಾಗಿದ್ದೀರಿ. ಆದರೆ ನಾನು ಈ ಲೋಕದವನಲ್ಲ.
24ನೀವು ನಿಮ್ಮ ಪಾಪಗಳಲ್ಲೇ ಸಾಯುವಿರಿ ಎಂದು ನಾನು ನಿಮಗೆ ಹೇಳಿದೆ. ಹೌದು, ನಾನೇ ಆತನೆಂಬುದನ್ನು ನೀವು ನಂಬದಿದ್ದರೆ ನಿಮ್ಮ ಪಾಪಗಳಲ್ಲಿಯೇ ನೀವು ಸಾಯುವಿರಿ'' ಎಂದು ಹೇಳಿದನು.
25ಯೆಹೂದ್ಯರು, ''ಹಾಗಾದರೆ, ನೀನು ಯಾರು?'' ಎಂದು ಕೇಳಿದರು.

ಯೇಸು, ''ನಾನು ಯಾರೆಂದು ನಿಮಗೆ ಮೊದಲಿಂದ ತಿಳಿಸುತ್ತಾ ಬಂದೆನೊ ಆತನೇ ನಾನು.
26ನಿಮ್ಮ ಬಗ್ಗೆ ಹೇಳಲು ನನ್ನಲ್ಲಿ ಅನೇಕ ಸಂಗತಿಗಳಿವೆ. ನಾನು ನಿಮಗೆ ತೀರ್ಪು ಮಾಡಬಲ್ಲೆನು. ಆದರೆ ನನ್ನನ್ನು ಕಳುಹಿಸಿದಾತನಿಂದ ನಾನು ಕೇಳಿದ ಸಂಗತಿಗಳನ್ನು ಮಾತ್ರ ಜನರಿಗೆ ಹೇಳುತ್ತೇನೆ. ಆತನು ಸತ್ಯವನ್ನೇ ತಿಳಿಸುತ್ತಾನೆ'' ಎಂದು ಉತ್ತರಕೊಟ್ಟನು.
27ಯೇಸು ಯಾರ ಬಗ್ಗೆ ಮಾತಾಡುತ್ತಿದ್ದಾನೆ ಎಂಬುದನ್ನು ಜನರು ಅರ್ಥಮಾಡಿಕೊಳ್ಳಲಿಲ್ಲ. ಯೇಸು ಅವರಿಗೆ ತಂದೆಯ (ದೇವರ) ಬಗ್ಗೆ ಹೇಳುತ್ತಿದ್ದನು.
28ಆದ್ದರಿಂದ ಆತನು ಅವರಿಗೆ, ''ನೀವು ಮನುಷ್ಯಕುಮಾರನನ್ನು ಮೇಲಕ್ಕೇರಿಸುವಿರಿ (ಕೊಲ್ಲುವಿರಿ). ನಾನೇ ಆತನೆಂಬುದು ಆಗ ನಿಮಗೆ ತಿಳಿಯುವುದು. ನಾನು ಈ ಕಾರ್ಯಗಳನ್ನು ನನ್ನ ಸ್ವಂತ ಅಧಿಕಾರದಿಂದ ಮಾಡುತ್ತಿಲ್ಲ ಎಂಬುದನ್ನು ನೀವು ತಿಳಿದುಕೊಳ್ಳುವಿರಿ. ಅಲ್ಲದೆ, ತಂದೆಯು ನನಗೆ ಉಪದೇಶಿಸಿದ ಸಂಗತಿಗಳನ್ನು ಮಾತ್ರ ನಾನು ಹೇಳುತ್ತೇನೆಂಬುದೂ ನಿಮಗೆ ಅರಿವಾಗುವುದು.
29ನನ್ನನ್ನು ಕಳುಹಿಸಿದಾತನು (ದೇವರು) ನನ್ನೊಂದಿಗೆ ಇದ್ದಾನೆ. ಆತನಿಗೆ ಮೆಚ್ಚಿಕೆಯಾದದ್ದನ್ನೇ ನಾನು ಯಾವಾಗಲೂ ಮಾಡುತ್ತೇನೆ. ಆದ್ದರಿಂದ ಆತನು ನನ್ನನ್ನು ಒಬ್ಬಂಟಿಗನಾಗಿ ಬಿಟ್ಟುಬಿಟ್ಟಿಲ್ಲ'' ಎಂದು ಹೇಳಿದನು.
30ಯೇಸು ಈ ಸಂಗತಿಗಳನ್ನು ಹೇಳುತ್ತಿದ್ದಾಗ, ಅನೇಕ ಜನರು ಆತನಲ್ಲಿ ನಂಬಿಕೆಯಿಟ್ಟರು.

### ಪಾಪವಿಮೋಚನೆಯ ಬಗ್ಗೆ ಯೇಸುವಿನ ಉಪದೇಶ

31ಆದ್ದರಿಂದ ಯೇಸು ತನ್ನಲ್ಲಿ ನಂಬಿಕೆ ಇಟ್ಟಿದ್ದ ಯೆಹೂದ್ಯರಿಗೆ, ''ನೀವು ನನ್ನ ಉಪದೇಶಕ್ಕೆ ವಿಧೇಯರಾಗಿದ್ದರೆ, ನೀವು ನಿಜವಾಗಿಯೂ ನನ್ನ ಹಿಂಬಾಲಕರಾಗಿದ್ದೀರಿ.
32ನೀವು ಸತ್ಯವನ್ನು ತಿಳಿದುಕೊಳ್ಳುವಿರಿ. ಆ ಸತ್ಯವು ನಿಮ್ಮನ್ನು ಬಿಡುಗಡೆ ಮಾಡುವುದು'' ಎಂದು ಹೇಳಿದನು.
33ಯೆಹೂದ್ಯರು, ''ನಾವು ಅಬ್ರಹಾಮನ ಮಕ್ಕಳು. ನಾವೆಂದೂ ಯಾರ ಗುಲಾಮರೂ ಆಗಿರಲಿಲ್ಲ. ಹೀಗಿದ್ದರೂ,

ನಮಗೆ ಬಿಡುಗಡೆ ಆಗುವುದೆಂದು ನೀನು ಹೇಳುವುದೇಕೆ?''
ಎಂದು ಉತ್ತರಕೊಟ್ಟರು.

34ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಪಾಪಮಾಡುವ ಪ್ರತಿಯೊಬ್ಬನೂ ಪಾಪಕ್ಕೆ ಗುಲಾಮನಾಗಿ
ದ್ದಾನೆ. ಪಾಪವು ಅವನ ಯಜಮಾನನಾಗಿದೆ. 35ಗುಲಾಮನು
ಒಂದು ಮನೆಯಲ್ಲಿ ಶಾಶ್ವತವಾಗಿ ಇರುವುದಿಲ್ಲ. ಆದರೆ ಮಗನು
ಕುಟುಂಬಕ್ಕೆ ಶಾಶ್ವತವಾಗಿ ಸೇರಿದವನಾಗಿದ್ದಾನೆ. 36ಆದ್ದರಿಂದ
ಮಗನು ನಿಮ್ಮನ್ನು ಬಿಡುಗಡೆ ಮಾಡಿದರೆ, ನೀವು ನಿಜ
ವಾಗಿಯೂ ಬಿಡುಗಡೆಯಾಗಿರುವಿರಿ. 37ನೀವು ಅಬ್ರಹಾಮನ
ಮಕ್ಕಳೆಂದು ನನಗೆ ಗೊತ್ತಿದೆ. ಆದರೆ ನೀವು ನನ್ನನ್ನು ಕೊಲ್ಲ
ಬೇಕೆಂದಿದ್ದೀರಿ. ಏಕೆಂದರೆ ನನ್ನ ಉಪದೇಶವನ್ನು ಸ್ವೀಕರಿಸಿ
ಕೊಳ್ಳಲು ನಿಮಗೆ ಇಷ್ಟವಿಲ್ಲ. 38ನನ್ನ ತಂದೆಯು ನನಗೆ ತೋರಿ
ಸಿರುವುದನ್ನೇ ನಾನು ನಿಮಗೆ ಹೇಳುತ್ತಿದ್ದೇನೆ. ನೀವಾದರೋ
ನಿಮ್ಮ ತಂದೆ ನಿಮಗೆ ಹೇಳಿದ ಸಂಗತಿಗಳನ್ನೇ ಮಾಡುತ್ತೀರಿ''
ಎಂದು ಉತ್ತರಕೊಟ್ಟನು.

39ಯೆಹೂದ್ಯರು, ''ಅಬ್ರಹಾಮನೇ ನಮ್ಮ ತಂದೆ'' ಎಂದು
ಉತ್ತರಿಸಿದರು.

ಯೇಸು, ''ನೀವು ನಿಜವಾಗಿಯೂ ಅಬ್ರಹಾಮನ
ಮಕ್ಕಳಾಗಿದ್ದರೆ, ಅಬ್ರಹಾಮನು ಮಾಡಿದ ಕಾರ್ಯಗಳನ್ನೇ
ಮಾಡುತ್ತಿದ್ದಿರಿ. 40ನಾನು ದೇವರಿಂದ ಕೇಳಿದ ಸತ್ಯವನ್ನು ನಿಮಗೆ
ಹೇಳಿದವನಾಗಿದ್ದೇನೆ. ಆದರೆ ನೀವು ನನ್ನನ್ನು ಕೊಲ್ಲಲು
ಪ್ರಯತ್ನಿಸುತ್ತಿದ್ದೀರಿ. ಅಬ್ರಹಾಮನು ಅಂಥದ್ದೇನ್ನೂ ಮಾಡ
ಲಿಲ್ಲ. 41ಆದ್ದರಿಂದ ನಿಮ್ಮ ಸ್ವಂತ ತಂದೆ ಮಾಡಿದ್ದನ್ನೇ ನೀವು
ಮಾಡುತ್ತಿದ್ದೀರಿ''ಎಂದು ಹೇಳಿದನು.

ಆದರೆ ಯೆಹೂದ್ಯರು, ''ನಾವು ಹಾದರಕ್ಕೆ ಹುಟ್ಟಿದವರಲ್ಲ.
ದೇವರೇ ನಮ್ಮ ತಂದೆ. ನಮಗಿರುವ ತಂದೆ ಆತನೊಬ್ಬನೇ''
ಎಂದು ಹೇಳಿದರು.

42ಯೇಸು ಆ ಯೆಹೂದ್ಯರಿಗೆ, ''ದೇವರು ನಿಜವಾಗಿಯೂ
ನಿಮ್ಮ ತಂದೆಯಾಗಿದ್ದರೆ, ನೀವು ನನ್ನನ್ನು ಪ್ರೀತಿಸುತ್ತಿದ್ದಿರಿ. ನಾನು
ದೇವರಿಂದ ಬಂದು ಈಗ ಇಲ್ಲಿದ್ದೇನೆ. ನಾನು ಬಂದದ್ದು ನನ್ನ
ಸ್ವಂತ ಅಧಿಕಾರದಿಂದಲ್ಲ. ದೇವರೇ ನನ್ನನ್ನು ಕಳುಹಿಸಿದನು.
43ನಾನು ಹೇಳುವ ಈ ಸಂಗತಿಗಳನ್ನು ನೀವು ಅರ್ಥಮಾಡಿ
ಕೊಳ್ಳುವುದಿಲ್ಲ. ಏಕೆಂದರೆ ನನ್ನ ಉಪದೇಶವನ್ನು ನೀವು
ಸ್ವೀಕರಿಸಿಕೊಳ್ಳಲಾರಿರಿ. 44ಸೈತಾನನೇ ನಿಮ್ಮ ತಂದೆ. ನೀವು
ಅವನಿಗೆ ಹುಟ್ಟಿದವರಾಗಿದ್ದೀರಿ. ಅವನ ದುರಿಚ್ಛೆಗಳನ್ನು
ಮಾಡಬಯಸುತ್ತೀರಿ. ಅವನು ಆರಂಭದಿಂದಲೂ ಕೊಲೆಗಾರ
ನಾಗಿದ್ದು ಸತ್ಯಕ್ಕೆ ವಿರೋಧವಾಗಿದ್ದನು. ಅವನಲ್ಲಿ ಸತ್ಯವು ಇಲ್ಲವೇ
ಇಲ್ಲ. ಅವನು ಸ್ವಭಾವಾನುಸಾರವಾಗಿ ಸುಳ್ಳಾಡುತ್ತಾನೆ. ಅವನು
ಸುಳ್ಳುಗಾರನೂ ಸುಳ್ಳಿಗೆ ತಂದೆಯೂ ಆಗಿದ್ದಾನೆ. 45ನಾನು
ಸತ್ಯವನ್ನು ಹೇಳುತ್ತೇನೆ. ಆದರೆ ನೀವು ನನ್ನನ್ನು ನಂಬುವುದಿಲ್ಲ.
46ನನ್ನಲ್ಲಿ ಪಾಪವನ್ನು ತೋರಿಸಿಕೊಡುವವನು ನಿಮ್ಮಲ್ಲಿ ಯಾವ
ನಾದರೂ ಇರುವನೇ? ನಾನು ಸತ್ಯವನ್ನು ಹೇಳಿದರೂ ನೀವೇಕೆ
ನಂಬುವುದಿಲ್ಲ?

47ದೇವರಿಂದ ಹುಟ್ಟಿದವನು ದೇವರು ಹೇಳುವ
ಮಾತುಗಳನ್ನು ಸ್ವೀಕರಿಸಿಕೊಳ್ಳುವನು. ಆದರೆ ನೀವು ದೇವರಿಂದ
ಹುಟ್ಟಿಲ್ಲದ ಕಾರಣ ಆತನ ಮಾತುಗಳನ್ನು ಸ್ವೀಕರಿಸಿಕೊಳ್ಳು
ವುದಿಲ್ಲ'' ಎಂದನು.

### ತನ್ನ ಮತ್ತು ಅಬ್ರಹಾಮನ ಬಗ್ಗೆ ಯೇಸುವಿನ ಹೇಳಿಕೆ

48ಯೆಹೂದ್ಯರು, ''ನಾವು ನಿನ್ನನ್ನು ಸಮಾರ್ಯದವನೆಂದು
ಹೇಳುತ್ತೇವೆ! ನಿನ್ನೊಳಗೆ ದೆವ್ವವು ಸೇರಿಕೊಂಡು ನಿನ್ನನ್ನು
ಹುಚ್ಚನನ್ನಾಗಿ ಮಾಡಿದೆ'' ಎಂದು ಉತ್ತರಕೊಟ್ಟರು. 49ಯೇಸು,
''ನನ್ನೊಳಗೆ ದೆವ್ವವಿಲ್ಲ. ನನ್ನ ತಂದೆಗೆ ನಾನು ಗೌರವ ಕೊಡು
ತ್ತೇನೆ, ಆದರೆ ನೀವು ನನಗೆ ಗೌರವ ಕೊಡುವುದಿಲ್ಲ. 50ನನಗಾಗಿ
ಗೌರವವನ್ನು ಪಡೆದುಕೊಳ್ಳಲು ನಾನು ಪ್ರಯತ್ನಿಸುತ್ತಿಲ್ಲ. ನನಗೆ
ಗೌರವ ದೊರೆಯಬೇಕೆಂದು ಬಯಸುವ ಒಬ್ಬಾತನಿದ್ದಾನೆ.
ಆತನೇ ನ್ಯಾಯಾಧಿಪತಿ. 51ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನನ್ನ ವಾಕ್ಯಕ್ಕೆ ವಿಧೇಯನಾಗುವವನು ಎಂದಿಗೂ
ಸಾಯುವುದಿಲ್ಲ'' ಎಂದು ಉತ್ತರಕೊಟ್ಟನು.

52ಯೆಹೂದ್ಯರು ಆತನಿಗೆ, ''ನಿನ್ನೊಳಗೆ ದೆವ್ವವಿದೆ ಎಂದು
ಈಗ ನಮಗೆ ತಿಳಿಯಿತು! ಅಬ್ರಹಾಮನು ಮತ್ತು ಪ್ರವಾದಿಗಳು
ಸಹ ಸತ್ತುಹೋದರು. ಆದರೆ 'ನನ್ನ ಉಪದೇಶಕ್ಕೆ ವಿಧೇಯ
ನಾಗುವವನು ಎಂದಿಗೂ ಸಾಯುವುದಿಲ್ಲ' ಎಂದು ನೀನು ಹೇಳು
ತ್ತಿರುವೆ. 53ನಮ್ಮ ತಂದೆಯಾದ ಅಬ್ರಹಾಮನಿಗಿಂತಲೂ ನೀನು
ದೊಡ್ಡವನೆಂದು ಭಾವಿಸಿಕೊಂಡಿರುವೆಯಾ? ಅಬ್ರಹಾಮನು
ಸತ್ತುಹೋದನು ಮತ್ತು ಪ್ರವಾದಿಗಳು ಸಹ ಸತ್ತುಹೋದರು.
ಹೀಗಿರಲು, ನೀನು ನಿನ್ನನ್ನು ಯಾರೆಂದು ಭಾವಿಸಿ
ಕೊಂಡಿರುವೆ?''ಎಂದು ಕೇಳಿದರು.

54ಯೇಸು, ''ನನ್ನನ್ನು ನಾನೇ ಮಹಿಮೆಪಡಿಸಿಕೊಂಡರೆ, ಆ
ಮಹಿಮೆಗೆ ಯಾವ ಬೆಲೆಯೂ ಇಲ್ಲ. ನನ್ನ ತಂದೆಯೇ ನನ್ನನ್ನು
ಮಹಿಮೆಪಡಿಸುವನು. ನೀವು ಆತನನ್ನೇ ನಿಮ್ಮ ದೇವರೆಂದು
ಹೇಳಿಕೊಳ್ಳುತ್ತೀರಿ. 55ಆದರೆ ನೀವು ಆತನನ್ನು ನಿಜವಾಗಿಯೂ
ತಿಳಿದಿಲ್ಲ. ನಾನು ಆತನನ್ನು ಬಲ್ಲೆನು. ನಾನು ಆತನನ್ನು
ತಿಳಿದಿಲ್ಲವೆಂದು ಹೇಳಿದರೆ ನಿಮ್ಮಂತೆ ನಾನು ಸಹ ಸುಳ್ಳುಗಾರ
ನಾಗುತ್ತೇನೆ. ನಾನು ಆತನನ್ನು ಬಲ್ಲೆನು. ನಾನು ಆತನ ವಾಕ್ಯಕ್ಕೆ
ವಿಧೇಯನಾಗುತ್ತೇನೆ.

56ನಾನು ಬರುವ ದಿನವನ್ನು ತಾನು ನೋಡುವುದಾಗಿ ನಿಮ್ಮ
ತಂದೆಯಾದ ಅಬ್ರಹಾಮನು ಬಹು ಸಂತೋಷಪಟ್ಟನು. ಅವನು
ಆ ದಿನವನ್ನು ಕಂಡು ಬಹು ಸಂತೋಷಗೊಂಡನು'' ಎಂದು
ಉತ್ತರಕೊಟ್ಟನು. 57ಯೆಹೂದ್ಯರು ಯೇಸುವಿಗೆ, ''ಏನು?
ನೀನು ಅಬ್ರಹಾಮನನ್ನು ನೋಡಿರುವಿಯೊ? ನಿನಗೆ ಐವತ್ತು
ವರ್ಷವೂ ಆಗಿಲ್ಲ!'' ಎಂದು ಹೇಳಿದರು.

58ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಅಬ್ರಹಾಮನು ಹುಟ್ಟುವುದಕ್ಕಿಂತ ಮೊದಲಿಂದಲೂ ನಾನು
ಇದ್ದೇನೆ!'' ಎಂದು ಉತ್ತರಿಸಿದನು. 59ಇದನ್ನು ಕೇಳಿದ ಕೂಡಲೇ
ಜನರು ಆತನತ್ತ ಬೀರಲು ಕಲ್ಲುಗಳನ್ನು ತೆಗೆದುಕೊಂಡರು.
ಆದರೆ ಯೇಸು ಅಡಗಿಕೊಂಡು ದೇವಾಲಯದಿಂದ ಹೊರಟು
ಹೋದನು.

### ಯೇಸು ಹುಟ್ಟುಕುರುಡನನ್ನು ಗುಣಪಡಿಸುವನು

9 ಯೇಸು ನಡೆದುಕೊಂಡು ಹೋಗುತ್ತಿದ್ದಾಗ ಒಬ್ಬ
ಹುಟ್ಟುಕುರುಡನನ್ನು ಕಂಡನು. 2ಯೇಸುವಿನ ಶಿಷ್ಯರು
ಆತನಿಗೆ, ''ಗುರುವೇ, ಈ ಮನುಷ್ಯನು ಹುಟ್ಟುಕುರುಡನಾಗಲು
ಯಾರ ಪಾಪ ಕಾರಣ? ಅವನ ಸ್ವಂತ ಪಾಪವೇ ಅಥವಾ ಅವನ
ತಂದೆತಾಯಿಗಳ ಪಾಪವೇ?'' ಎಂದು ಕೇಳಿದರು.

3ಯೇಸು, ‘‘ಅವನ ಪಾಪವಾಗಲಿ ಅವನ ತಂದೆತಾಯಿಗಳ
ಪಾಪವಾಗಲಿ ಇದಕ್ಕೆ ಕಾರಣವಲ್ಲ. ದೇವರ ಕಾರ್ಯವು ಅವನಲ್ಲಿ
ತೋರಿಬರಲೆಂದು ಹೀಗಾಗಿದ್ದಾನೆ. 4ನನ್ನನ್ನು ಕಳುಹಿಸಿದಾತನ
ಕಾರ್ಯವನ್ನು ಹಗಲಿರುವಾಗಲೇ ನಾವು ಮಾಡಬೇಕು. ರಾತ್ರಿ
ಬರುತ್ತದೆ. ಆಗ ಯಾವನೂ ಕೆಲಸ ಮಾಡಲಾರನು. 5ನಾನು
ಈ ಲೋಕದಲ್ಲಿರುವಾಗ, ನಾನೇ ಈ ಲೋಕಕ್ಕೆ ಬೆಳಕಾಗಿದ್ದೇನೆ’’
ಎಂದು ಹೇಳಿದನು.

6ಯೇಸು ಈ ಮಾತನ್ನು ಹೇಳಿದ ಮೇಲೆ ನೆಲದ ಮೇಲೆ
ಉಗುಳಿ ಅದರಿಂದ ಕೆಸರನ್ನು ಮಾಡಿಕೊಂಡು ಆ ಮನುಷ್ಯನ
ಕಣ್ಣುಗಳಿಗೆ ಹಚ್ಚಿದನು. 7ಯೇಸು ಆ ಮನುಷ್ಯನಿಗೆ, ‘‘ಹೋಗಿ
ಶಿಲೋವಮ್ ಕೊಳದಲ್ಲಿ (ಶಿಲೋವಮ್ ಅಂದರೆ
‘‘ಕಳುಹಿಸಲ್ಪಟ್ಟವನು.’’) ತೊಳೆದುಕೊ’’ ಎಂದು ಹೇಳಿದನು.
ಅಂತೆಯೇ ಅವನು ಹೋಗಿ ತೊಳೆದುಕೊಂಡನು. ಆ ಕೂಡಲೇ
ಅವನಿಗೆ ದೃಷ್ಟಿ ಬಂದಿತು.

8ಈ ಮನುಷ್ಯನು ಮೊದಲು ಭಿಕ್ಷೆ ಬೇಡುತ್ತಿದ್ದುದನ್ನು
ನೋಡಿದ್ದ ಕೆಲವರು ಮತ್ತು ಅವನ ನೆರೆಯವರು, ‘‘ನೋಡಿ!
ಭಿಕ್ಷೆ ಬೇಡುತ್ತಾ ಯಾವಾಗಲೂ ಕುಳಿತುಕೊಂಡಿದ್ದವನು ಇವನೇ
ಅಲ್ಲವೇ’’ ಎಂದು ವಿಚಾರಿಸಿದರು.

9ಕೆಲವು ಜನರು, ‘‘ಹೌದು ಅವನೇ’’ ಎಂದು ಹೇಳಿದರು.
ಇನ್ನು ಕೆಲವರು, ‘‘ಇಲ್ಲ, ಇವನು ಆ ಮನುಷ್ಯನಲ್ಲ. ಇವನು
ಅವನಂತಿದ್ದಾನಷ್ಟೇ’’ ಎಂದು ಹೇಳಿದರು.

ಅದಕ್ಕೆ ಆ ಮನುಷ್ಯನು, ‘‘ನಾನೇ ಅವನು’’ ಎಂದು
ಹೇಳಿದನು.

10ಆಗ ಜನರು, ‘‘ನೀನು ದೃಷ್ಟಿಯನ್ನು ಹೇಗೆ ಪಡೆದು
ಕೊಂಡೆ?’’ ಎಂದು ಕೇಳಿದರು.

11ಆ ಮನುಷ್ಯನು, ‘‘ಯೇಸು ಎಂಬವನು ಸ್ವಲ್ಪ ಕೆಸರನ್ನು
ಮಾಡಿ ನನ್ನ ಕಣ್ಣುಗಳಿಗೆ ಹಚ್ಚಿ, ಶಿಲೋವಮ್ ಕೊಳಕ್ಕೆ ಹೋಗಿ
ತೊಳೆದುಕೊಳ್ಳಲು ಹೇಳಿದನು. ಅಂತೆಯೇ ನಾನು ತೊಳೆದು
ಕೊಂಡೆನು. ಈಗ ನನಗೆ ಕಣ್ಣು ಕಾಣಿಸುತ್ತಿದೆ’’ ಎಂದು ಉತ್ತರ
ಕೊಟ್ಟನು. 12ಜನರು ಆ ಮನುಷ್ಯನಿಗೆ, ‘‘ಆ ವ್ಯಕ್ತಿ ಎಲ್ಲಿದ್ದಾನೆ?’’
ಎಂದು ಕೇಳಿದರು. ಆ ಮನುಷ್ಯನು, ‘‘ನನಗೆ ಗೊತ್ತಿಲ್ಲ’’ ಎಂದು
ಉತ್ತರಕೊಟ್ಟನು.

### ಗುಣಹೊಂದಿದ ವ್ಯಕ್ತಿಗೆ ಫರಿಸಾಯರಿಂದ ವಿಚಾರಣೆ

13ಬಳಿಕ ಜನರು ಆ ಮನುಷ್ಯನನ್ನು ಫರಿಸಾಯರ ಬಳಿಗೆ
ಕರೆದುತಂದರು. ಮೊದಲು ಕುರುಡನಾಗಿದ್ದವನು ಅವನೇ.
14ಯೇಸು ಕೆಸರು ಮಾಡಿ ಅವನ ಕಣ್ಣುಗಳನ್ನು ಗುಣಪಡಿ
ಸಿದ್ದನು. ಯೇಸು ಈ ಕಾರ್ಯವನ್ನು ಮಾಡಿದ್ದು ಸಬ್ಬತ್
ದಿನದಲ್ಲಿ. 15ಆದ್ದರಿಂದ ಅವರು ಆ ಮನುಷ್ಯನಿಗೆ, ‘‘ನೀನು
ದೃಷ್ಟಿಯನ್ನು ಹೇಗೆ ಪಡೆದುಕೊಂಡೆ?’’ ಎಂದು ಕೇಳಿದರು.

ಆ ಮನುಷ್ಯನು, ‘‘ಆತನು ನನ್ನ ಕಣ್ಣುಗಳಿಗೆ ಕೆಸರನ್ನು
ಹಚ್ಚಿದನು. ನಾನು ತೊಳೆದುಕೊಂಡೆನು. ಈಗ ನನಗೆ ಕಣ್ಣು
ಕಾಣಿಸುತ್ತಿದೆ’’ ಎಂದು ಉತ್ತರಕೊಟ್ಟನು.

16ಫರಿಸಾಯರಲ್ಲಿ ಕೆಲವರು, ‘‘ಈ ಮನುಷ್ಯನು (ಯೇಸು)
ಸಬ್ಬತ್ ದಿನದ ವಿಷಯದಲ್ಲಿ ಧರ್ಮಶಾಸ್ತ್ರಕ್ಕೆ ವಿಧೇಯನಾಗು
ವುದಿಲ್ಲ. ಆದ್ದರಿಂದ ಇವನು ದೇವರಿಂದ ಬಂದಿಲ್ಲ’’ ಎಂದು
ಹೇಳಿದರು. ಇತರರು, ‘‘ಇವನು ಪಾಪಿಯಾಗಿದ್ದರೆ ಇಂಥ
ಅದ್ಭುತಕಾರ್ಯಗಳನ್ನು ಹೇಗೆ ಮಾಡಲಾದೀತು?’’ ಎಂದರು.
ಹೀಗೆ ಯೆಹೂದ್ಯರಲ್ಲೇ ಭಿನ್ನಾಭಿಪ್ರಾಯ ಉಂಟಾಯಿತು.

17ಯೆಹೂದ್ಯನಾಯಕರು ಗುಣಹೊಂದಿದವನಿಗೆ, ‘‘ಆ
ಮನುಷ್ಯನು (ಯೇಸು) ನಿನ್ನನ್ನು ಗುಣಪಡಿಸಿದನು ಮತ್ತು ನಿನಗೆ
ಕಣ್ಣು ಕಾಣಿಸುತ್ತಿದೆ. ಆದರೆ ಅವನ ಬಗ್ಗೆ ನಿನಗೇನು
ಅನ್ನಿಸುತ್ತದೆ?’’ ಎಂದು ಕೇಳಿದರು.

ಅದಕ್ಕೆ ಅವನು, ‘‘ಆತನು ಒಬ್ಬ ಪ್ರವಾದಿ’’ ಎಂದು
ಉತ್ತರಕೊಟ್ಟನು. 18ಈ ಮನುಷ್ಯನು ಮೊದಲು
ಕುರುಡನಾಗಿದ್ದನು. ಆದರೆ ಈಗ ಇವನಿಗೆ ಗುಣವಾಗಿದೆ ಎಂದು
ಯೆಹೂದ್ಯ ನಾಯಕರುಗಳು ನಂಬಲಿಲ್ಲ. ಆದ್ದರಿಂದ ಅವರು
ಅವನ ತಂದೆತಾಯಿಗಳನ್ನು ಕರೆಯಿಸಿದರು. 19ಅವರು ಅವನ
ತಂದೆತಾಯಿಗಳಿಗೆ, ‘‘ಇವನು ನಿಮ್ಮ ಮಗನೋ? ಇವನು
ಹುಟ್ಟುಕುರುಡನೆಂದು ನೀವು ಹೇಳುತ್ತೀರಿ. ಹಾಗಾದರೆ ಇವನಿಗೆ
ಈಗ ಹೇಗೆ ಕಣ್ಣು ಕಾಣಿಸುತ್ತದೆ?’’ ಎಂದು ಕೇಳಿದರು.

20ತಂದೆತಾಯಿಗಳು, ‘‘ಇವನು ನಮ್ಮ ಮಗನೆಂದು ನಮಗೆ
ಗೊತ್ತು. ಇವನು ಹುಟ್ಟುಕುರುಡನೆಂಬುದೂ ನಮಗೆ ಗೊತ್ತು.
21ಆದರೆ ಈಗ ಇವನಿಗೆ ಹೇಗೆ ಕಣ್ಣು ಕಾಣಿಸುತ್ತದೆಯೋ ಯಾರು
ಗುಣಪಡಿಸಿದರೋ ನಮಗೆ ತಿಳಿಯದು. ಅವನನ್ನೇ ಕೇಳಿ.
ಇವನು ತನ್ನ ವಿಷಯವಾಗಿ ಹೇಳುವಷ್ಟು ಪ್ರಾಯಸ್ಥನಾಗಿದ್ದಾನೆ’’
ಎಂದು ಉತ್ತರಕೊಟ್ಟರು. 22ಅವನ ತಂದೆತಾಯಿಗಳು
ಯೆಹೂದ್ಯನಾಯಕರಿಗೆ ಹೆದರಿಕೊಂಡಿದ್ದರಿಂದ ಹಾಗೆ ಹೇಳಿ
ದರು. ಯೇಸುವನ್ನು ಕ್ರಿಸ್ತನೆಂದು ಹೇಳುವ ಯಾರನ್ನೇ ಆಗಲಿ
ಸಭಾಮಂದಿರದಿಂದ ಬಹಿಷ್ಕರಿಸುವುದಾಗಿ ಯೆಹೂದ್ಯನಾಯಕ
ರುಗಳು ಪ್ರಕಟಿಸಿದ್ದರು. 23ಆದಕಾರಣವೇ ಅವನ ತಂದೆ
ತಾಯಿಗಳು, ‘‘ಅವನು ಪ್ರಾಯಸ್ಥನಾಗಿದ್ದಾನೆ. ಅವನನ್ನೇ ಕೇಳಿ’’
ಎಂದು ಹೇಳಿದರು.

24ಯೆಹೂದ್ಯನಾಯಕರು ಕುರುಡನಾಗಿದ್ದ ಆ ಮನುಷ್ಯ
ನನ್ನು ಒಳಗೆ ಕರೆದು, ‘‘ನೀನು ದೇವರನ್ನು ಮಹಿಮೆಪಡಿಸ
ಬೇಕು. ಈ ಮನುಷ್ಯನು (ಯೇಸು) ಪಾಪಿಯೆಂದು ನಮಗೆ
ಗೊತ್ತಿದೆ’’ ಎಂದರು.

25ಆ ಮನುಷ್ಯನು, ‘‘ಅವನು ಪಾಪಿಯೋ ಅಲ್ಲವೋ ನನಗೆ
ಗೊತ್ತಿಲ್ಲ. ಆದರೆ ನಾನು ಕುರುಡನಾಗಿದ್ದೆನು; ಈಗ ನನಗೆ ದೃಷ್ಟಿ
ಬಂದಿದೆ ಎಂಬುದಂತೂ ನನಗೆ ಗೊತ್ತಿದೆ’’ ಎಂದು ಉತ್ತರ
ಕೊಟ್ಟನು.

26ಯೆಹೂದ್ಯನಾಯಕರು, ‘‘ಅವನು (ಯೇಸು) ನಿನ
ಗೇನು ಮಾಡಿದನು? ಅವನು ನಿನ್ನ ಕಣ್ಣುಗಳನ್ನು ಹೇಗೆ
ಗುಣಪಡಿಸಿದನು?’’ ಎಂದು ಕೇಳಿದರು.

27ಆ ಮನುಷ್ಯನು, ‘‘ಆಗಲೇ ನಿಮಗೆ ಅದನ್ನು ತಿಳಿಸಿದ್ದೇನೆ.
ಆದರೆ ನೀವು ನನಗೆ ಕಿವಿಗೊಡಲಿಲ್ಲ. ಈಗ ಅದನ್ನು ಮತ್ತೆ ಏಕೆ
ಕೇಳಬೇಕೆಂದಿದ್ದೀರಿ? ನೀವು ಸಹ ಆತನ ಹಿಂಬಾಲಕ
ರಾಗಬೇಕೆಂದಿದ್ದೀರೋ?’’ ಎಂದು ಉತ್ತರಕೊಟ್ಟನು.

28ಯೆಹೂದ್ಯನಾಯಕರು ಕೋಪಗೊಂಡು ಆ ಮನುಷ್ಯ
ನನ್ನು ಅಪಹಾಸ್ಯಮಾಡಿ, ‘‘ನೀನು ಅವನ (ಯೇಸು) ಹಿಂಬಾಲಕ
ನಾಗಿರುವೆ. ನಾವು ಮೋಶೆಯ ಹಿಂಬಾಲಕರಾಗಿದ್ದೇವೆ.
29ದೇವರು ಮೋಶೆಯೊಂದಿಗೆ ಮಾತಾಡಿದನೆಂಬುದನ್ನು ನಾವು
ಬಲ್ಲೆವು. ಆದರೆ ಈ ಮನುಷ್ಯನು (ಯೇಸು) ಎಲ್ಲಿಂದ ಬಂದ
ನೆಂಬುದು ಸಹ ನಮಗೆ ಗೊತ್ತಿಲ್ಲ!’’ ಎಂದು ಹೇಳಿದರು.

30ಆ ಮನುಷ್ಯನು, ''ಇದು ಬಹು ಆಶ್ಚರ್ಯಕರವಾದ
ಸಂಗತಿ. ಯೇಸು ಎಲ್ಲಿಂದ ಬಂದನೆಂಬುದು ನಿಮಗೆ ಗೊತ್ತಿಲ್ಲ.
ಆದರೆ ಆತನು ನನ್ನ ಕಣ್ಣುಗಳನ್ನು ಗುಣಪಡಿಸಿದನು. 31ದೇವರು
ಪಾಪಿಗಳಿಗೆ ಕಿವಿಗೊಡುವುದಿಲ್ಲವೆಂಬುದು ನಮ್ಮೆಲ್ಲರಿಗೂ
ಗೊತ್ತಿದೆ. ಆದರೆ ದೇವರು ತನ್ನನ್ನು ಆರಾಧಿಸುವವನಿಗೂ ಮತ್ತು
ತನಗೆ ವಿಧೇಯನಾಗುವವನಿಗೂ ಕಿವಿಗೊಡುತ್ತಾನೆ. 32ಹುಟ್ಟು
ಕುರುಡನೊಬ್ಬನನ್ನು ಯಾರಾದರೂ ಎಂದಾದರೂ ಗುಣಪಡಿ
ಸಿರುವುದು ಇದೇ ಮೊದಲನೆ ಸಲ. 33ಆ ಮನುಷ್ಯನು (ಯೇಸು)
ದೇವರಿಂದಲೇ ಬಂದಿರಬೇಕು. ಆತನು ದೇವರಿಂದ ಬಂದಿಲ್ಲ
ದಿದ್ದರೆ, ಇಂಥ ಕಾರ್ಯಗಳನ್ನು ಮಾಡಲಾಗುತ್ತಿರಲಿಲ್ಲ'' ಎಂದು
ಉತ್ತರಕೊಟ್ಟನು.

34ಯೆಹೂದ್ಯನಾಯಕರು, ''ಪಾಪದಲ್ಲೇ ಹುಟ್ಟಿ
ಬೆಳೆದವನು ನೀನು! ನಮಗೇ ಉಪದೇಶಮಾಡುವಿಯಾ?''
ಎಂದು ಉತ್ತರ ಕೊಟ್ಟರು. ಅಲ್ಲದೆ ಅವರು ಅವನನ್ನು ಬಲವಂತ
ವಾಗಿ ಹೊರಗಟ್ಟಿದರು.

## ಆತ್ಮಿಕ ಅಂಧತೆ

35ಯೆಹೂದ್ಯನಾಯಕರು ಆ ಮನುಷ್ಯನನ್ನು ಹೊರ
ಗಟ್ಟಿದ್ದು ಯೇಸುವಿಗೆ ತಿಳಿಯಿತು. ಯೇಸು ಆ ಮನುಷ್ಯನನ್ನು
ಕಂಡು, ''ನೀನು ಮನುಷ್ಯಕುಮಾರನಲ್ಲಿ ನಂಬಿಕೆ
ಯಿಡುವಿಯಾ?'' ಎಂದು ಕೇಳಿದನು. 36ಆ ಮನುಷ್ಯನು,
''ಸ್ವಾಮೀ, ಆ ಮನುಷ್ಯಕುಮಾರನು ಯಾರು? ನನಗೆ ತಿಳಿಸು.
ನಾನು ಆತನಲ್ಲಿ ನಂಬಿಕೆ ಇಡುತ್ತೇನೆ'' ಎಂದು ಹೇಳಿದನು.

37ಯೇಸು, ''ನೀನು ಆತನನ್ನು ಈಗಾಗಲೇ ನೋಡಿರುವೆ.
ಈಗ ನಿನ್ನೊಂದಿಗೆ ಮಾತಾಡುತ್ತಿರುವಾತನೇ ಮನುಷ್ಯ
ಕುಮಾರನು'' ಎಂದು ಹೇಳಿದನು.

38ಆ ಮನುಷ್ಯನು, ''ಹೌದು ಪ್ರಭುವೇ, ನಾನು
ನಂಬುತ್ತೇನೆ!'' ಎಂದು ಉತ್ತರಕೊಟ್ಟನು. ಬಳಿಕ ಅವನು
ಯೇಸುವಿಗೆ ಅಡ್ಡಬಿದ್ದು ಆರಾಧಿಸಿದನು. 39ಯೇಸು, ''ಈ
ಲೋಕಕ್ಕೆ ತೀರ್ಪಾಗಲೆಂದು ನಾನು ಈ ಲೋಕಕ್ಕೆ ಬಂದೆನು.
ಕುರುಡರು ಕಾಣುವಂತಾಗಲೆಂದೂ ಕಣ್ಣುಳ್ಳವರು ಕುರುಡ
ರಾಗಲೆಂದೂ ನಾನು ಬಂದೆನು'' ಎಂದು ಹೇಳಿದನು.

40ಅಲ್ಲಿದ್ದ ಫರಿಸಾಯರು ಇದನ್ನು ಕೇಳಿ, ''ಏನು? ನಮ್ಮನ್ನು
ಸಹ ಕುರುಡರೆಂದು ಹೇಳುತ್ತಿರುವೆಯಾ?'' ಎಂದು
ಪ್ರಶ್ನಿಸಿದರು.

41ಯೇಸು, ''ನೀವು ನಿಜವಾಗಿಯೂ ಕುರುಡರಾಗಿದ್ದರೆ
ಪಾಪವೆಂಬ ಅಪರಾಧಕ್ಕೆ ಗುರಿಯಾಗುತ್ತಿರಲಿಲ್ಲ. ಆದರೆ ನೀವು,
'ನಮಗೆ ಕಣ್ಣು ಕಾಣುತ್ತದೆ' ಎಂದು ಹೇಳುತ್ತೀರಿ. ಆದ್ದರಿಂದ
ನೀವು ಪಾಪಿಗಳೇ ಆಗಿದ್ದೀರಿ'' ಎಂದು ಹೇಳಿದನು.

## ಕುರುಬನು ಮತ್ತು ಅವನ ಕುರಿಗಳು

10 ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಒಬ್ಬನು ಕುರಿಹಟ್ಟಿಯೊಳಗೆ ಪ್ರವೇಶಿಸುವಾಗ
ಬಾಗಿಲಿನ ಮೂಲಕ ಪ್ರವೇಶಿಸಬೇಕು. ಮತ್ತೆಲ್ಲಿಂದಾದರೂ ಹತ್ತಿ
ಬರುವವನು ಸುಲಿಗೆಗಾರನಾಗಿದ್ದಾನೆ; ಕುರಿಗಳನ್ನು ಕದ್ದು
ಕೊಳ್ಳಲು ಪ್ರಯತ್ನಿಸುವವನಾಗಿದ್ದಾನೆ. 2ಆದರೆ ಕುರುಬನು
ಬಾಗಿಲ ಮೂಲಕ ಪ್ರವೇಶಿಸುತ್ತಾನೆ. 3ಕಾವಲುಗಾರನು
ಕುರುಬನಿಗೆ ಬಾಗಿಲನ್ನು ತೆರೆಯುತ್ತಾನೆ. ಕುರಿಗಳು ಅವನ ಸ್ವರಕ್ಕೆ
ಕಿವಿಗೊಡುತ್ತವೆ. ಕುರುಬನು ತನ್ನ ಸ್ವಂತ ಕುರಿಗಳನ್ನು ಹೆಸರು
ಹಿಡಿದು ಕರೆದು ಹೊರಗೆ ಬಿಡುತ್ತಾನೆ. 4ಆ ಬಳಿಕ ಅವುಗಳ
ಮುಂದೆ ಹೋಗುತ್ತಾ ಅವುಗಳಿಗೆ ಮಾರ್ಗದರ್ಶನ ಮಾಡು
ತ್ತಾನೆ. ಕುರಿಗಳು ಅವನನ್ನು ಹಿಂಬಾಲಿಸುತ್ತವೆ; ಏಕೆಂದರೆ ಅವು
ಅವನ ಸ್ವರವನ್ನು ತಿಳಿದಿವೆ. 5ಆದರೆ ಕುರಿಗಳು ತಮಗೆ ಗೊತ್ತಿಲ್ಲದ
ವ್ಯಕ್ತಿಯನ್ನು ಎಂದಿಗೂ ಹಿಂಬಾಲಿಸುವುದಿಲ್ಲ. ಅವುಗಳು ಆ
ವ್ಯಕ್ತಿಯ ಬಳಿಯಿಂದ ಓಡಿಹೋಗುತ್ತವೆ. ಏಕೆಂದರೆ ಅವುಗಳು
ಅವನ ಸ್ವರವನ್ನು ತಿಳಿದಿಲ್ಲ'' ಎಂದು ಹೇಳಿದನು. 6ಯೇಸು
ಹೇಳಿದ ಈ ಸಾಮ್ಯದ ಅರ್ಥವನ್ನು ಜನರು ಗ್ರಹಿಸಿಕೊಳ್ಳಲಿಲ್ಲ.

## ಯೇಸು ಒಳ್ಳೆಯ ಕುರುಬ

7ಆದ್ದರಿಂದ ಯೇಸು ಮತ್ತೆ, ''ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ನಾನೇ ಕುರಿಗಳಿಗೆ ಬಾಗಿಲಾಗಿದ್ದೇನೆ. 8ನಾನು
ಬರುವುದಕ್ಕಿಂತ ಮೊದಲು ಬಂದವರೆಲ್ಲರೂ ಕಳ್ಳರಾಗಿದ್ದರು
ಮತ್ತು ಸುಲಿಗೆಗಾರರಾಗಿದ್ದರು. ಕುರಿಗಳು ಅವರಿಗೆ ಕಿವಿ
ಗೊಡಲಿಲ್ಲ. 9ನಾನೇ ಬಾಗಿಲಾಗಿದ್ದೇನೆ. ನನ್ನ ಮೂಲಕವಾಗಿ
ಪ್ರವೇಶಿಸುವವರು ರಕ್ಷಣೆ ಹೊಂದುವರು. ಅವರು ಒಳಗೆ ಬರ
ಬಲ್ಲರು, ಹೊರಗೆ ಹೋಗಬಲ್ಲರು ಮತ್ತು ಹುಲ್ಲುಗಾವಲನ್ನು
ಕಂಡುಕೊಳ್ಳುವರು. 10ಕಳ್ಳನು ಕದಿಯುವುದಕ್ಕೂ ಕೊಲ್ಲು
ವುದಕ್ಕೂ ನಾಶಮಾಡುವುದಕ್ಕೂ ಬರುತ್ತಾನೆ. ನಾನಾದರೊ
ಸಮೃದ್ಧಿಕರವಾದ ಜೀವವನ್ನು ಕೊಡಲು ಬಂದೆನು.

11''ನಾನೇ ಒಳ್ಳೆಯ ಕುರುಬ. ಒಳ್ಳೆಯ ಕುರುಬನು
ಕುರಿಗಳಿಗಾಗಿ ತನ್ನ ಪ್ರಾಣವನ್ನು ಕೊಡುತ್ತಾನೆ. 12ಕುರಿಗಳನ್ನು
ನೋಡಿಕೊಳ್ಳುವುದಕ್ಕಾಗಿ ನಿಯಮಿತವಾಗಿರುವ ಕೂಲಿಯಾಳು
ಕುರುಬನಿಗಿಂತ ಭಿನ್ನವಾಗಿದ್ದಾನೆ. ಕೂಲಿಯಾಳು ಕುರಿಗಳ
ಒಡೆಯನಲ್ಲ. ಆದ್ದರಿಂದ ಕೂಲಿಯಾಳು ತೋಳ ಬರುವುದನ್ನು
ಕಾಣುವಾಗ ಕುರಿಗಳನ್ನು ಬಿಟ್ಟು ಓಡಿಹೋಗುತ್ತಾನೆ. ಆಗ
ತೋಳವು ಕುರಿಗಳ ಮೇಲೆ ಬಿದ್ದು ಅವುಗಳನ್ನು ಚದರಿಸಿ
ಬಿಡುತ್ತದೆ. 13ಆ ವ್ಯಕ್ತಿಯು ಓಡಿಹೋಗುತ್ತಾನೆ. ಏಕೆಂದರೆ
ಅವನು ಕೇವಲ ಕೂಲಿಗಾರನಾಗಿದ್ದಾನೆ. ಅವನು ಕುರಿಗಳ ಬಗ್ಗೆ
ನಿಜವಾಗಿಯೂ ಚಿಂತಿಸುವುದಿಲ್ಲ. 14-15ನಾನು ಕುರಿಗಳಿಗಾಗಿ
(ಜನರಿಗಾಗಿ) ಚಿಂತಿಸುವ ಕುರುಬನಾಗಿದ್ದೇನೆ. ನನ್ನ ತಂದೆಯು
ನನ್ನನ್ನು ತಿಳಿದಿರುವಂತೆ ನನ್ನ ಕುರಿಗಳನ್ನು ನಾನು ತಿಳಿದಿದ್ದೇನೆ.
ಮತ್ತು ನಾನು ನನ್ನ ತಂದೆಯನ್ನು ತಿಳಿದಿರುವಂತೆ ನನ್ನ ಕುರಿಗಳು
ನನ್ನನ್ನು ತಿಳಿದಿವೆ. ಈ ಕುರಿಗಳಿಗೋಸ್ಕರ ನನ್ನ ಜೀವವನ್ನೇ
ಕೊಡುತ್ತೇನೆ. 16ನನಗೆ ಬೇರೆ ಕುರಿಗಳು ಸಹ ಇವೆ. ಅವುಗಳು
ಇಲ್ಲಿರುವ ಈ ಮಂದೆಯಲ್ಲಿಲ್ಲ. ನಾನು ಅವುಗಳನ್ನು ಸಹ ಒಳಗೆ
ನಡೆಸಬೇಕು. ಅವುಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ಮುಂದಿನ
ಕಾಲದಲ್ಲಿ ಒಂದೇ ಮಂದೆಯಿರುವುದು ಮತ್ತು ಒಬ್ಬನೇ ಕುರುಬ
ನಿರುವನು. 17ತಂದೆಯು ನನ್ನನ್ನು ಪ್ರೀತಿಸುತ್ತಾನೆ, ಏಕೆಂದರೆ
ನಾನು ನನ್ನ ಪ್ರಾಣವನ್ನು ಮತ್ತೆ ಪಡೆದುಕೊಳ್ಳುವುದಕ್ಕಾಗಿ
ಕೊಡುತ್ತೇನೆ. 18ನನ್ನ ಪ್ರಾಣವನ್ನು ಯಾರೂ ನನ್ನಿಂದ
ಕಸಿದುಕೊಳ್ಳಲಾರರು; ನಾನೇ ಅದನ್ನು ಇಚ್ಛಾಪೂರ್ವಕವಾಗಿ
ಕೊಡುತ್ತೇನೆ. ನನ್ನ ಪ್ರಾಣವನ್ನು ಕೊಡುವುದಕ್ಕೂ ಅದನ್ನು ಮತ್ತೆ
ಪಡೆದುಕೊಳ್ಳುವುದಕ್ಕೂ ನನಗೆ ಹಕ್ಕಿದೆ. ಹೀಗೆ ಮಾಡಬೇಕೆಂದು
ತಂದೆಯೇ ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

19ಯೇಸು ಈ ಸಂಗತಿಗಳನ್ನು ಹೇಳಿದ್ದರಿಂದ ಯೆಹೂದ್ಯ
ರಲ್ಲಿ ಮತ್ತೆ ಭೇದ ಉಂಟಾಯಿತು. 20ಅವರಲ್ಲಿ ಅನೇಕರು,
‘‘ಅವನೊಳಗೆ ದೆವ್ವವು ಸೇರಿಕೊಂಡು ಅವನನ್ನು ಹುಚ್ಚನನ್ನಾಗಿ
ಮಾಡಿದೆ. ಅವನಿಗೆ ಏಕೆ ಕಿವಿಗೊಡುತ್ತೀರಿ?’’ ಎಂದು
ಹೇಳಿದರು.

21ಆದರೆ ಇತರರು, ‘‘ದೆವ್ವದಿಂದ ಹುಚ್ಚು ಹಿಡಿದಿರುವ
ಮನುಷ್ಯನು ಈ ರೀತಿಯ ಸಂಗತಿಗಳನ್ನು ಹೇಳುವುದಿಲ್ಲ.
ಕುರುಡರ ಕಣ್ಣುಗಳನ್ನು ಗುಣಪಡಿಸಲು ದೆವ್ವಕ್ಕೆ ಸಾಧ್ಯವೇ?
ಇಲ್ಲ!’’ ಎಂದು ಹೇಳಿದರು.

## ಯೇಸುವಿನ ವಿರುದ್ಧ ಯೆಹೂದ್ಯರು

22ಜೆರುಸಲೇಮಿನಲ್ಲಿ ಆಚರಿಸುವ ಪ್ರತಿಷ್ಠೆಯ ಹಬ್ಬವು
ನಡೆಯುತ್ತಿತ್ತು. ಅದು ಚಳಿಗಾಲದಲ್ಲಿ ಆಚರಿಸುವ ಹಬ್ಬ.
23ಯೇಸು ದೇವಾಲಯದೊಳಗೆ ಸೊಲೊಮೋನನ ಆಲಯ
ದಲ್ಲಿದ್ದನು. 24ಯೆಹೂದ್ಯರು ಯೇಸುವಿನ ಸುತ್ತಲೂ ನೆರೆದರು.
ಅವರು ಆತನಿಗೆ, ‘‘ಇನ್ನೆಷ್ಟುಕಾಲ ನೀನು ನಿನ್ನ ಬಗ್ಗೆ ನಮ್ಮನ್ನು
ಆಶ್ಚರ್ಯಗೊಳಿಸುವೆ? ನೀನು ಕ್ರಿಸ್ತನಾಗಿದ್ದರೆ, ನಮಗೆ
ಸ್ಪಷ್ಟವಾಗಿ ತಿಳಿಸು’’ ಎಂದು ಹೇಳಿದರು.

25ಯೇಸು, ‘‘ನಾನು ಆಗಲೇ ನಿಮಗೆ ಹೇಳಿದೆನು, ಆದರೆ
ನೀವು ನಂಬಲಿಲ್ಲ. ನನ್ನ ತಂದೆಯ ಹೆಸರಿನಲ್ಲಿ ನಾನು ಅದ್ಭುತ
ಕಾರ್ಯಗಳನ್ನು ಮಾಡುತ್ತೇನೆ. ನಾನು ಯಾರೆಂಬುದನ್ನು ಆ
ಅದ್ಭುತಕಾರ್ಯಗಳು ತೋರಿಸುತ್ತವೆ. 26ಆದರೆ ನೀವು ನಂಬು
ವುದಿಲ್ಲ. ಏಕೆಂದರೆ ನೀವು ನನ್ನ ಕುರಿಗಳಲ್ಲ (ಜನರಲ್ಲ). 27ನನ್ನ
ಕುರಿಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ನಾನು ಅವುಗಳನ್ನು
ಬಲ್ಲೆನು, ಮತ್ತು ಅವುಗಳು ನನ್ನನ್ನು ಹಿಂಬಾಲಿಸುತ್ತವೆ. 28ನನ್ನ
ಕುರಿಗಳಿಗೆ ನಾನು ನಿತ್ಯಜೀವವನ್ನು ಕೊಡುತ್ತೇನೆ. ಅವು
ಎಂದಿಗೂ ಸಾಯುವುದಿಲ್ಲ. ಮತ್ತು ಅವುಗಳನ್ನು ಯಾರೂ
ನನ್ನಿಂದ ಕಸಿದುಕೊಳ್ಳಲಾರರು. 29ನನ್ನ ಕುರಿಗಳನ್ನು ನನ್ನ
ತಂದೆಯೇ ನನಗೆ ಕೊಟ್ಟನು. ಆತನು ಎಲ್ಲರಿಗಿಂತಲೂ
ದೊಡ್ಡವನಾಗಿದ್ದಾನೆ. ನನ್ನ ಕುರಿಗಳನ್ನು ನನ್ನ ತಂದೆಯ
ಕೈಯಿಂದ ಯಾರೂ ಕದ್ದುಕೊಳ್ಳಲಾರರು. 30ತಂದೆಯು ಮತ್ತು
ನಾನು ಒಂದೇ ಆಗಿದ್ದೇವೆ’’ ಎಂದು ಉತ್ತರ ಕೊಟ್ಟನು.

31ಯೆಹೂದ್ಯರು ಯೇಸುವನ್ನು ಕೊಲ್ಲಲು ಮತ್ತೆ
ಕಲ್ಲುಗಳನ್ನು ತೆಗೆದುಕೊಂಡರು. 32ಆದರೆ ಯೇಸು ಅವರಿಗೆ,
‘‘ನಾನು ತಂದೆಯಿಂದ ಅನೇಕ ಒಳ್ಳೆಯ ಕಾರ್ಯಗಳನ್ನು
ಮಾಡಿದ್ದೇನೆ. ನೀವು ಆ ಕಾರ್ಯಗಳನ್ನು ನೋಡಿದ್ದೀರಿ. ಆ
ಒಳ್ಳೆಯ ಕಾರ್ಯಗಳಲ್ಲಿ ಯಾವುದರ ನಿಮಿತ್ತ ನೀವು ನನ್ನನ್ನು
ಕೊಲ್ಲಬೇಕೆಂದಿದ್ದೀರಿ?’’ ಎಂದು ಹೇಳಿದನು.

33ಯೆಹೂದ್ಯರು, ‘‘ನಾವು ನಿನ್ನನ್ನು ಕೊಲ್ಲುತ್ತಿರುವುದು
ನೀನು ಮಾಡಿದ ಯಾವುದೇ ಒಳ್ಳೆಯ ಕಾರ್ಯದ
ನಿಮಿತ್ತದಿಂದಲ್ಲ. ನೀನು ಮಾಡುತ್ತಿರುವ ದೇವದೂಷಣೆಗಾಗಿ.
ನೀನು ಕೇವಲ ಒಬ್ಬ ಮನುಷ್ಯ. ನೀನು ನಿನ್ನನ್ನೇ ದೇವರೆಂದು
ಹೇಳಿಕೊಳ್ಳುತ್ತಿರುವೆ! ಆದಕಾರಣ ಕಲ್ಲುಗಳಿಂದ ನಿನ್ನನ್ನು
ಕೊಲ್ಲಬೇಕೆಂದಿದ್ದೇವೆ!’’ ಎಂದು ಉತ್ತರ ಕೊಟ್ಟರು.

34ಅದಕ್ಕೆ ಯೇಸು, ‘‘ನಿಮ್ಮ ಧರ್ಮಶಾಸ್ತ್ರದಲ್ಲಿ, ‘ನಾನು
ನಿಮ್ಮನ್ನು ದೇವರುಗಳೆಂದು ಹೇಳಿದೆನು’* ಎಂಬುದಾಗಿ
ಬರೆದಿದೆ. 35ದೇವರ ಸಂದೇಶವನ್ನು ಹೊಂದಿದ್ದ ಜನರನ್ನು ಈ
ಪವಿತ್ರಗ್ರಂಥವು ದೇವರುಗಳೆಂದು ಕರೆದಿದೆ. ಪವಿತ್ರ ಗ್ರಂಥವು
ಯಾವಾಗಲೂ ಸತ್ಯವಾದದ್ದು. 36ತಂದೆಯೇ ನನ್ನನ್ನು ಪ್ರತಿಷ್ಠಿಸಿ
ಈ ಲೋಕಕ್ಕೆ ಕಳುಹಿಸಿಕೊಟ್ಟಿರುವುದರಿಂದ ನಾನು ದೇವರ
ಮಗನು ಎಂದು ಹೇಳಿದ್ದಕ್ಕೆ ನೀವು ನನ್ನನ್ನು ದೇವದೂಷಣೆ
ಮಾಡುತ್ತಿದ್ದಾನೆಂದು ಹೇಳುವುದೇಕೆ? 37ನನ್ನ ತಂದೆಯು
ಮಾಡುವುದನ್ನು ನಾನು ಮಾಡದಿದ್ದರೆ, ನಾನು ಹೇಳುವುದನ್ನು
ನಂಬಬೇಡಿ. 38ಆದರೆ ನನ್ನ ತಂದೆಯು ಮಾಡುವ ಕಾರ್ಯ
ಗಳನ್ನೇ ನಾನು ಮಾಡಿದರೆ, ಆ ಕಾರ್ಯಗಳಲ್ಲಿ ನೀವು ನಂಬಿಕೆ
ಇಡಬೇಕು. ನೀವು ನನ್ನಲ್ಲಿ ನಂಬಿಕೆ ಇಡದಿದ್ದರೂ ನನ್ನ ಕಾರ್ಯ
ಗಳಲ್ಲಾದರೂ ನಂಬಿಕೆ ಇಡಿರಿ. ತಂದೆಯು ನನ್ನಲ್ಲಿದ್ದಾನೆ ಮತ್ತು
ನಾನು ತಂದೆಯಲ್ಲಿದ್ದೇನೆ ಎಂಬುದನ್ನು ಆಗ ನೀವು ತಿಳಿದು
ಕೊಳ್ಳುವಿರಿ ಮತ್ತು ಅರ್ಥಮಾಡಿಕೊಳ್ಳುವಿರಿ’’ ಎಂದು
ಹೇಳಿದನು.

39ಯೇಸುವನ್ನು ಬಂಧಿಸಲು ಯೆಹೂದ್ಯರು ಮತ್ತೆ
ಪ್ರಯತ್ನಿಸಿದರು. ಆದರೆ ಯೇಸು ಅವರಿಂದ ತಪ್ಪಿಸಿಕೊಂಡನು.

40ಬಳಿಕ ಯೇಸು ಜೋರ್ಡನ್ ನದಿಯ ಆಚೆಯ ದಡಕ್ಕೆ
ಹೋದನು. ಯೋಹಾನನು ಮೊದಲು ದೀಕ್ಷಾಸ್ನಾನ ಕೊಡು
ತ್ತಿದ್ದ ಸ್ಥಳಕ್ಕೆ ಯೇಸು ಹೋಗಿ ಅಲ್ಲಿ ತಂಗಿದನು. 41ಆಗ ಅನೇಕ
ಜನರು ಆತನ ಬಳಿಗೆ ಬಂದರು. ‘‘ಯೋಹಾನನು ಎಂದೂ
ಅದ್ಭುತಕಾರ್ಯವನ್ನು ಮಾಡಲಿಲ್ಲ. ಆದರೆ ಯೋಹಾನನು ಈ
ಮನುಷ್ಯನ (ಯೇಸುವಿನ) ಬಗ್ಗೆ ಹೇಳಿದ ಪ್ರತಿಯೊಂದೂ
ಸತ್ಯವಾದದ್ದು’’ ಎಂದು ಅವರು ಮಾತಾಡಿಕೊಂಡರು. 42ಮತ್ತು
ಅಲ್ಲಿ ಅನೇಕ ಜನರು ಯೇಸುವಿನಲ್ಲಿ ನಂಬಿಕೆ ಇಟ್ಟರು.

## ಲಾಜರನ ಮರಣ

11 ಲಾಜರನೆಂಬ ಒಬ್ಬನು ಅಸ್ವಸ್ಥನಾಗಿದ್ದನು. ಅವನು
ಬೆಥಾನಿಯ ಎಂಬ ಊರಿನಲ್ಲಿ ವಾಸವಾಗಿದ್ದನು.
ಮರಿಯಳು ಮತ್ತು ಆಕೆಯ ಸಹೋದರಿಯಾದ ಮಾರ್ಥಳು ಈ
ಊರಿನಲ್ಲೇ ವಾಸವಾಗಿದ್ದರು. 2ಪ್ರಭುವಿಗೆ (ಯೇಸುವಿಗೆ)
ಪರಿಮಳ ತೈಲವನ್ನು ಹಚ್ಚಿ ಆತನ ಪಾದಗಳನ್ನು ತನ್ನ ತಲೆಕೂದಲಿ
ನಿಂದ ಒರಸಿದವಳೇ ಈ ಮರಿಯಳು. ಅಸ್ವಸ್ಥನಾಗಿದ್ದ ಲಾಜರನು
ಮರಿಯಳ ಸಹೋದರನಾಗಿದ್ದನು. 3ಆದ್ದರಿಂದ ಮರಿಯಳು
ಮತ್ತು ಮಾರ್ಥಳು, ‘‘ಪ್ರಭುವೇ, ನಿನ್ನ ಪ್ರಿಯ ಸ್ನೇಹಿತನಾದ
ಲಾಜರನು ಅಸ್ವಸ್ಥನಾಗಿದ್ದಾನೆ’’ ಎಂಬ ಸಂದೇಶವನ್ನು ಆತನಿಗೆ
ತಿಳಿಸಲು ಒಬ್ಬನನ್ನು ಕಳುಹಿಸಿಕೊಟ್ಟರು.

4ಯೇಸು ಇದನ್ನು ಕೇಳಿದಾಗ, ‘‘ಈ ಕಾಯಿಲೆಯು ದೇವರ
ಮತ್ತು ದೇವಕುಮಾರನ ಮಹಿಮೆಗಾಗಿ ಬಂದಿದೆಯೇ ಹೊರತು
ಮರಣಕ್ಕಾಗಿಯಲ್ಲ’’ ಎಂದು ಹೇಳಿದನು. 5(ಯೇಸು ಮಾರ್ಥ
ಳನ್ನು, ಆಕೆಯ ಸಹೋದರಿಯನ್ನು ಮತ್ತು ಲಾಜರನನ್ನು
ಪ್ರೀತಿಸುತ್ತಿದ್ದನು.) 6‘ಲಾಜರನು ಅಸ್ವಸ್ಥನಾಗಿದ್ದಾನೆ’ ಎಂಬ
ವಾರ್ತೆಯನ್ನು ಆತನು ಕೇಳಿದಾಗ ತಾನಿದ್ದ ಸ್ಥಳದಲ್ಲಿಯೇ ಇನ್ನೂ
ಎರಡು ದಿನಗಳವರೆಗೆ ತಂಗಿದನು. 7ಬಳಿಕ ಆತನು ತನ್ನ ಶಿಷ್ಯರಿಗೆ,
‘‘ನಾವು ಜುದೇಯಕ್ಕೆ ಹಿಂತಿರುಗಿ ಹೋಗಬೇಕು’’ ಎಂದು
ಹೇಳಿದನು.

8ಶಿಷ್ಯರು, ‘‘ಗುರುವೇ, ಜುದೇಯದ ಯೆಹೂದ್ಯರು
ನಿನ್ನನ್ನು ಕಲ್ಲುಗಳಿಂದ ಕೊಲ್ಲಲು ಪ್ರಯತ್ನಿಸಿದರು. ಆದಾದದ್ದು

**ನಾನು … ಹೇಳಿದೆನು** ಕೀರ್ತನೆ 82:6

ಕೇವಲ ಸ್ವಲ್ಪಕಾಲದ ಹಿಂದೆಯಷ್ಟೇ. ಈಗ ನೀನು ಮತ್ತೆ ಅಲ್ಲಿಗೆ
ಹೋಗಬೇಕೆನ್ನುವಿಯಾ?'' ಎಂದು ಉತ್ತರಕೊಟ್ಟರು.
9ಯೇಸು, ''ಹಗಲಿಗೆ ಹನ್ನೆರಡು ತಾಸುಗಳಿರುತ್ತವೆ.
ಹೌದಲ್ಲವೇ? ಹಗಲಿನಲ್ಲಿ ನಡೆಯುವವನು ಎಡವಿ ಬೀಳು
ವುದಿಲ್ಲ. ಏಕೆಂದರೆ ಈ ಲೋಕದ ಬೆಳಕಿನಿಂದ ಅವನು ನೋಡ
ಬಲ್ಲನು. 10ಆದರೆ ರಾತ್ರಿಯಲ್ಲಿ ನಡೆಯುವವನು ಎಡವುತ್ತಾನೆ.
ಏಕೆಂದರೆ ನೋಡಿಕೊಂಡು ನಡೆಯಲು ಅವನಿಗೆ ಯಾವ
ಬೆಳಕೂ ಇರುವುದಿಲ್ಲ'' ಎಂದು ಉತ್ತರಕೊಟ್ಟನು.
11ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ, ''ನಮ್ಮ
ಸ್ನೇಹಿತನಾದ ಲಾಜರನು ಈಗ ನಿದ್ರಿಸುತ್ತಿದ್ದಾನೆ. ಅವನನ್ನು
ಎಬ್ಬಿಸಲು ನಾನು ಅಲ್ಲಿಗೆ ಹೋಗುತ್ತಿದ್ದೇನೆ''ಎಂದು ಹೇಳಿದನು.
12ಶಿಷ್ಯರು, ''ಪ್ರಭುವೇ, ಅವನು ನಿದ್ರೆ ಮಾಡುತ್ತಿದ್ದರೆ
ಆರೋಗ್ಯ ಹೊಂದುವನು'' ಎಂದು ಉತ್ತರಕೊಟ್ಟರು.
13ಲಾಜರನು ಸತ್ತುಹೋಗಿದ್ದಾನೆ ಎಂಬರ್ಥದಲ್ಲಿ ಯೇಸು
ಹೇಳಿದನು. ಆದರೆ ಲಾಜರನು ನಿಜವಾಗಿಯೂ ನಿದ್ರಿಸುತ್ತಿದ್ದಾನೆ
ಎಂಬರ್ಥದಲ್ಲಿ ಯೇಸು ಹೇಳಿದನೆಂಬುದಾಗಿ ಶಿಷ್ಯರು ಭಾವಿಸಿ
ಕೊಂಡರು. 14ಆದ್ದರಿಂದ ಯೇಸು, ''ಲಾಜರನು ಸತ್ತುಹೋಗಿ
ದ್ದಾನೆ. 15ಆದರೆ ನಾನು ಅಲ್ಲಿ ಇಲ್ಲದಿದ್ದ ಕಾರಣ ಸಂತೋಷಿಸು
ತ್ತೇನೆ. ನಿಮ್ಮ ವಿಷಯದಲ್ಲಿಯೂ ನಾನು ಸಂತೋಷಪಡುತ್ತೇನೆ.
ಏಕೆಂದರೆ, ಆಗ ನೀವು ನನ್ನಲ್ಲಿ ನಂಬಿಕೆ ಇಡುವಿರಿ. ಬನ್ನಿ, ಅವನ
ಬಳಿಗೆ ಹೋಗೋಣ'' ಎಂದು ಸ್ಪಷ್ಟವಾಗಿ ಹೇಳಿದನು. 16ಆಗ
ದಿದುಮನೆಂಬ ತೋಮನು ತನ್ನ ಜೊತೆ ಶಿಷ್ಯರಿಗೆ, ''ನಾವು ಸಹ
ಯೇಸುವಿನೊಂದಿಗೆ ಹೋಗಿ ಜುದೇಯದಲ್ಲಿ ಸಾಯೋಣ''
ಎಂದು ಹೇಳಿದನು.

## ಬೆಥಾನಿಯಲ್ಲಿ ಯೇಸು

17ಯೇಸು ಬೆಥಾನಿಯಕ್ಕೆ ಬಂದನು. ಈಗಾಗಲೇ
ಲಾಜರನು ಸತ್ತು ಸಮಾಧಿಯಾಗಿ ನಾಲ್ಕು ದಿನಗಳಾಯಿ
ತೆಂಬುದು ಯೇಸುವಿಗೆ ತಿಳಿಯಿತು. 18ಬೆಥಾನಿಯು ಜೆರುಸ
ಲೇಮಿನಿಂದ ಸುಮಾರು ಎರಡು ಮೈಲಿಗಳಷ್ಟು ದೂರದಲ್ಲಿತ್ತು.
19ಅನೇಕ ಯೆಹೂದ್ಯರು ಮಾರ್ಥ ಮತ್ತು ಮರಿಯಳ ಬಳಿಗೆ
ಬಂದಿದ್ದರು. ಮಾರ್ಥ ಮತ್ತು ಮರಿಯಳನ್ನು ಅವರ ತಮ್ಮನಾದ
ಲಾಜರನ ವಿಷಯದಲ್ಲಿ ಸಂತೈಸಲು ಯೆಹೂದ್ಯರು ಬಂದಿದ್ದರು.
20ಯೇಸು ಬರುತ್ತಿದ್ದಾನೆ ಎಂಬ ಸುದ್ದಿಯನ್ನು ಕೇಳಿ
ಮಾರ್ಥಳು ಆತನನ್ನು ವಂದಿಸಲು ಹೊರಗೆ ಹೋದಳು. ಆದರೆ
ಮರಿಯಳು ಮನೆಯಲ್ಲೇ ಇದ್ದಳು. 21ಮಾರ್ಥಳು ಯೇಸುವಿಗೆ,
''ಪ್ರಭುವೇ, ನೀನು ಇಲ್ಲಿ ಇದ್ದಿದ್ದರೆ, ನನ್ನ ಸಹೋದರನು
ಸಾಯುತ್ತಿರಲಿಲ್ಲ. 22ಆದರೆ ಈಗಲೂ ಸಹ ನೀನು ಏನನ್ನೇ ಕೇಳಿ
ಕೊಂಡರೂ ದೇವರು ನಿನಗೆ ಕೊಡುತ್ತಾನೆ ಎಂಬುದು ನನಗೆ
ತಿಳಿದಿದೆ'' ಎಂದು ಹೇಳಿದಳು.
23ಯೇಸು, ''ನಿನ್ನ ಸಹೋದರನು ಮತ್ತೆ ಜೀವಂತವಾಗಿ
ಎದ್ದು ಬರುವನು'' ಎಂದು ಹೇಳಿದನು.
24ಮಾರ್ಥಳು, ''ಅಂತಿಮ ದಿನದಂದು ಪುನರುತ್ಥಾನ
ವಾಗುವಾಗ ಅವನು ಮತ್ತೆ ಎದ್ದು ಬರುವನೆಂದು ನನಗೆ
ಗೊತ್ತಿದೆ'' ಎಂಬುದಾಗಿ ಉತ್ತರ ಕೊಟ್ಟಳು.
25ಯೇಸು ಆಕೆಗೆ, ''ನಾನೇ ಪುನರುತ್ಥಾನ. ನಾನೇ ಜೀವ.
ನನ್ನನ್ನು ನಂಬುವವನು ತಾನು ಸತ್ತನಂತರವೂ ಮತ್ತೆ ಜೀವವನ್ನು
ಹೊಂದುವನು. 26ಮತ್ತು ಬದುಕುತ್ತಾ ನನ್ನನ್ನು ನಂಬುವವನು
ಎಂದಿಗೂ ನಿಜವಾಗಿ ಸಾಯುವುದಿಲ್ಲ. ಮಾರ್ಥಳೇ, ನೀನು
ಇದನ್ನು ನಂಬುವಿಯಾ?'' ಎಂದನು.
27ಮಾರ್ಥಳು, ''ಹೌದು ಪ್ರಭುವೇ, ನೀನು ದೇವರ ಮಗ
ನಾದ ಕ್ರಿಸ್ತನೆಂದು ನಾನು ನಂಬುವೆ. ಈ ಲೋಕಕ್ಕೆ ಬರ
ಬೇಕಾಗಿದ್ದವನು ನೀನೇ'' ಎಂದು ಉತ್ತರಕೊಟ್ಟಳು.

## ಯೇಸು ಕಣ್ಣೀರಿಡುವನು

28ಮಾರ್ಥಳು ಹೀಗೆ ಹೇಳಿದ ಮೇಲೆ, ತನ್ನ ಸಹೋದರಿ
ಯಾದ ಮರಿಯಳ ಬಳಿಗೆ ಹಿಂತಿರುಗಿ ಹೋದಳು. ಮಾರ್ಥಳು
ಮರಿಯಳೊಂದಿಗೆ ಪ್ರತ್ಯೇಕವಾಗಿ ಮಾತಾಡಿ, ''ಗುರುವು
(ಯೇಸು) ನಿನ್ನನ್ನು ಕರೆಯುತ್ತಿದ್ದಾನೆ'' ಎಂದು ತಿಳಿಸಿದಳು.
29ಇದನ್ನು ಕೇಳಿದ ಕೂಡಲೇ ಮರಿಯಳು ಎದ್ದು ಯೇಸುವಿನ
ಬಳಿಗೆ ಬೇಗಬೇಗನೆ ಹೋದಳು. 30ಯೇಸು ಇನ್ನೂ
ಊರೊಳಗೆ ಬಂದಿರಲಿಲ್ಲ. ಮಾರ್ಥಳು ತನ್ನನ್ನು ಸಂಧಿಸಿದ
ಸ್ಥಳದಲ್ಲೇ ಆತನಿದ್ದನು. 31ಯೆಹೂದ್ಯರು ಮರಿಯಳೊಂದಿಗೆ
ಮನೆಯಲ್ಲಿದ್ದರು. ಅವರು ಆಕೆಯನ್ನು ಸಂತೈಸುತ್ತಿದ್ದರು.
ಮರಿಯಳು ಎದ್ದು ಬೇಗನೆ ಹೋಗುವುದನ್ನು ಅವರು ಕಂಡರು.
ಆಕೆಯು ಅಳುವುದಕ್ಕಾಗಿ ಸಮಾಧಿಯ ಬಳಿಗೆ ಹೋಗುತ್ತಿದ್ದಾ
ಳೆಂದು ಅವರು ಭಾವಿಸಿಕೊಂಡು ಆಕೆಯನ್ನು ಹಿಂಬಾಲಿಸಿದರು.
32ಯೇಸು ಇದ್ದ ಸ್ಥಳಕ್ಕೆ ಮರಿಯಳು ಹೋದಳು. ಆಕೆಯು
ಯೇಸುವನ್ನು ಕಂಡಾಗ ಆತನ ಪಾದಗಳಿಗೆ ಅಡ್ಡಬಿದ್ದು,
''ಪ್ರಭುವೇ, ನೀನು ಇಲ್ಲಿ ಇದ್ದಿದ್ದರೆ, ನನ್ನ ಸಹೋದರನು
ಸಾಯುತ್ತಿರಲಿಲ್ಲ'' ಎಂದು ಹೇಳಿದಳು.
33ಮರಿಯಳ ಮತ್ತು ಆಕೆಯೊಂದಿಗೆ ಬಂದಿದ್ದ ಯೆಹೂದ್ಯರ
ಗೋಳಾಟವನ್ನು ಯೇಸು ನೋಡಿದಾಗ, ತನ್ನ ಹೃದಯದಲ್ಲಿ
ಬಹಳವಾಗಿ ದುಃಖಗೊಂಡು ತತ್ತರಿಸಿದನು. 34ಯೇಸು ಅವರಿಗೆ,
''ಅವನನ್ನು ಎಲ್ಲಿ ಇಟ್ಟಿದ್ದೀರಿ?'' ಎಂದು ಕೇಳಿದನು. ಅದಕ್ಕೆ
ಅವರು, ''ಸ್ವಾಮೀ, ಬಂದು ನೋಡು'' ಎಂದರು.
35ಯೇಸು ಕಣ್ಣೀರಿಟ್ಟನು.
36ಆಗ ಯೆಹೂದ್ಯರು, ''ನೋಡಿ! ಯೇಸು ಅವನನ್ನು
ಬಹಳವಾಗಿ ಪ್ರೀತಿಸುತ್ತಿದ್ದನು!'' ಎಂದರು.
37ಆದರೆ ಕೆಲವು ಯೆಹೂದ್ಯರು, ''ಯೇಸು ಕುರುಡನ
ಕಣ್ಣುಗಳನ್ನು ಗುಣಪಡಿಸಿದನಲ್ಲಾ; ಲಾಜರನಿಗೂ ಸಹಾಯ
ಮಾಡಿ ಅವನನ್ನು ಸಾವಿನಿಂದ ತಪ್ಪಿಸಬಾರದಾಗಿತ್ತೇ?''
ಎಂದರು.

## ಮರುಜೀವ ಪಡೆದ ಲಾಜರ

38ಯೇಸು ತನ್ನ ಹೃದಯದಲ್ಲಿ ಮತ್ತೆ ಬಹಳವಾಗಿ ದುಃಖ
ಗೊಂಡು, ಲಾಜರನಿದ್ದ ಸಮಾಧಿಯ ಬಳಿಗೆ ಬಂದನು. ಆ
ಸಮಾಧಿಯು ಒಂದು ಗವಿಯಾಗಿತ್ತು. ಅದರ ಬಾಯಿಗೆ ದೊಡ್ಡ
ಕಲ್ಲನ್ನು ಮುಚ್ಚಿದ್ದರು. 39''ಆ ಕಲ್ಲನ್ನು ತೆಗೆದುಹಾಕಿರಿ'' ಎಂದು
ಯೇಸು ಹೇಳಿದನು.

ಲಾಜರನ ಅಕ್ಕಳಾದ ಮಾರ್ಥಳು, ''ಪ್ರಭುವೇ, ಲಾಜರನು
ಸತ್ತು ನಾಲ್ಕು ದಿನಗಳಾಗಿವೆ. ಆದ್ದರಿಂದ ಅಲ್ಲಿ ದುರ್ವಾಸನೆ
ಯಿರುತ್ತದೆ'' ಎಂದು ಹೇಳಿದಳು.

40ಯೇಸು ಮಾರ್ಥಳಿಗೆ, ‘‘ನಾನು ನಿನಗೆ ಹೇಳಿದ್ದನ್ನು
ಜ್ಞಾಪಿಸಿಕೊಳ್ಳುವಿಯಾ? ನೀನು ನಂಬಿದರೆ ದೇವರ ಮಹಿಮೆ
ಯನ್ನು ಕಾಣುವೆ ಎಂದು ನಾನು ನಿನಗೆ ಹೇಳಿದೆನು’’ ಎಂದನು.
41ಆದ್ದರಿಂದ ಅವರು ಸಮಾಧಿಯ ಬಾಯಿಂದ ಕಲ್ಲನ್ನು
ತೆಗೆದುಹಾಕಿದರು. ಆಗ ಯೇಸು ಕಣ್ಣೆತ್ತಿ ಮೇಲಕ್ಕೆ ನೋಡಿ,
‘‘ತಂದೆಯೇ, ನನ್ನ ಪ್ರಾರ್ಥನೆಯನ್ನು ಕೇಳಿದ್ದರಿಂದ ನಿನ್ನನ್ನು
ಕೊಂಡಾಡುತ್ತೇನೆ. 42ನೀನು ಯಾವಾಗಲೂ ನನಗೆ ಕಿವಿ
ಗೊಡುವೆ ಎಂಬುದು ನನಗೆ ತಿಳಿದಿದೆ. ಆದರೆ ಇಲ್ಲಿ ನನ್ನ ಸುತ್ತಲೂ
ನೆರೆದಿರುವ ಜನರಿಗೋಸ್ಕರವಾಗಿ ನಾನು ಈ ಸಂಗತಿಗಳನ್ನು
ಹೇಳಿದೆನು. ನೀನೇ ನನ್ನನ್ನು ಕಳುಹಿಸಿರುವುದಾಗಿ ಅವರು ನಂಬ
ಬೇಕೆಂದು ನಾನು ಬಯಸುತ್ತೇನೆ’’ ಎಂದನು. 43ಬಳಿಕ ಯೇಸು
ಗಟ್ಟಿಯಾದ ಧ್ವನಿಯಿಂದ, ‘‘ಲಾಜರನೇ ಹೊರಗೆ ಬಾ!’’ ಎಂದು
ಕರೆದನು. 44ಸತ್ತುಹೋಗಿದ್ದವನು (ಲಾಜರನು) ಹೊರಗೆ
ಬಂದನು. ಅವನ ಕೈಕಾಲುಗಳನ್ನು ಬಟ್ಟೆಗಳಿಂದ ಸುತ್ತಲಾಗಿತ್ತು.
ಅವನ ಮುಖವನ್ನು ಕರವಸ್ತ್ರದಿಂದ ಮುಚ್ಚಲಾಗಿತ್ತು.

ಆಗ ಯೇಸು, ‘‘ಅವನಿಗೆ ಸುತ್ತಿರುವ ಬಟ್ಟೆಗಳನ್ನು
ತೆಗೆದುಹಾಕಿರಿ, ಅವನು ಹೋಗಲಿ’’ ಎಂದು ಹೇಳಿದನು.

## ಯೇಸುವನ್ನು ಕೊಲ್ಲಲು ಯೆಹೂದ್ಯ ನಾಯಕರ ಸಂಚು

(ಮತ್ತಾಯ 26:1-5; ಮಾರ್ಕ 14:1-2; ಲೂಕ 22:1-2)

45ಮರಿಯಳನ್ನು ಸಂದರ್ಶಿಸಲು ಬಂದಿದ್ದ ಅನೇಕ
ಯೆಹೂದ್ಯರು ಅಲ್ಲಿದ್ದರು. ಯೇಸು ಮಾಡಿದ ಈ ಕಾರ್ಯವನ್ನು
ಕಂಡ ಇವರಲ್ಲಿ ಅನೇಕರು ಯೇಸುವಿನಲ್ಲಿ ನಂಬಿಕೆ ಇಟ್ಟರು.
46ಆದರೆ ಕೆಲವು ಯೆಹೂದ್ಯರು ಫರಿಸಾಯರ ಬಳಿಗೆ ಹೋಗಿ,
ಯೇಸು ಮಾಡಿದ್ದನ್ನು ತಿಳಿಸಿದರು. 47ಆಗ ಮಹಾಯಾಜಕರು
ಮತ್ತು ಫರಿಸಾಯರು ಯೆಹೂದ್ಯರ ಆಲೋಚನಾಸಭೆಯನ್ನು
ಕರೆದು, ‘‘ನಾವು ಏನು ಮಾಡಬೇಕು? ಈ ಮನುಷ್ಯನು
(ಯೇಸು) ಅನೇಕ ಸೂಚಕಕಾರ್ಯಗಳನ್ನು ಮಾಡುತ್ತಿದ್ದಾನೆ.
48ಈ ಕಾರ್ಯಗಳನ್ನು ಮಾಡಲು ನಾವು ಅವನಿಗೆ ಅವಕಾಶ
ಕೊಟ್ಟರೆ ಜನರೆಲ್ಲರೂ ಇವನಲ್ಲಿ ನಂಬಿಕೆ ಇಡುವರು. ಆಗ
ರೋಮ್ ರಾಜ್ಯದವರು ಬಂದು ನಮ್ಮ ದೇವಾಲಯವನ್ನೂ
ನಮ್ಮ ದೇಶವನ್ನೂ ವಶಪಡಿಸಿಕೊಳ್ಳುವರು’’ ಅಂದರು.
49ಅವರಲ್ಲಿ ಕಾಯಫನೆಂಬ ಒಬ್ಬನಿದ್ದನು. ಅವನು ಆ ವರ್ಷ
ಮಹಾಯಾಜಕನಾಗಿದ್ದನು. ಅವನು, ‘‘ನಿಮಗೆ ಏನೂ ಗೊತ್ತಿಲ್ಲ!
50ಇಡೀ ಜನಾಂಗವು ನಾಶವಾಗುವುದಕ್ಕಿಂತ ಒಬ್ಬನು ಅವರಿ
ಗೋಸ್ಕರವಾಗಿ ಸಾಯುವುದು ಉತ್ತಮ. ಆದರೆ ನೀವು ಇದನ್ನು
ಅರ್ಥಮಾಡಿಕೊಳ್ಳುತ್ತಿಲ್ಲ’’ ಎಂದು ಹೇಳಿದನು.
51ಇದು ಕಾಯಫನ ಸ್ವಂತ ಆಲೋಚನೆಯಾಗಿರಲಿಲ್ಲ.
ಅವನು ಆ ವರ್ಷ ಮಹಾಯಾಜಕನಾಗಿದ್ದನು. ಆದ್ದರಿಂದ
ಯೆಹೂದ್ಯರಿಗೋಸ್ಕರವಾಗಿ ಯೇಸು ಸಾಯುತ್ತಾನೆಂದು
ಅವನು ನಿಜವಾಗಿಯೂ ಪ್ರವಾದಿಸಿದನು. 52ಹೌದು,
ಯೆಹೂದ್ಯರಿಗಾಗಿಯೂ ಲೋಕದಲ್ಲೆಲ್ಲಾ ಚದರಿಹೋಗಿರುವ
ದೇವರ ಮಕ್ಕಳನ್ನೆಲ್ಲ ಒಂದುಗೂಡಿಸುವುದಕ್ಕಾಗಿಯೂ ಆತನು
ಸಾಯಲಿದ್ದನು.
53ಅಂದಿನಿಂದ ಯೆಹೂದ್ಯನಾಯಕರು ಯೇಸುವನ್ನು
ಕೊಲ್ಲಲು ಸಂಚು ಮಾಡಲಾರಂಭಿಸಿದರು. 54ಆದ್ದರಿಂದ
ಯೇಸುವು ಯೆಹೂದ್ಯರ ಮಧ್ಯದಲ್ಲಿ ಬಹಿರಂಗವಾಗಿ ಸಂಚರಿಸು
ವುದನ್ನು ಬಿಟ್ಟುಬಿಟ್ಟನು. ಆತನು ಜೆರುಸಲೇಮನ್ನು ಬಿಟ್ಟು
ಮರುಭೂಮಿಯ ಸಮೀಪದಲ್ಲಿದ್ದ ಸ್ಥಳಕ್ಕೆ ಹೋಗಿ ಎಫ್ರಾ
ಯಿಮ್ ಎಂಬ ಊರಿನಲ್ಲಿ ತನ್ನ ಶಿಷ್ಯರ ಸಂಗಡ ಇಳಿದು
ಕೊಂಡನು.
55ಆಗ ಯೆಹೂದ್ಯರ ಪಸ್ಕಹಬ್ಬವು ಸಮೀಪವಾಗಿತ್ತು.
ಪಸ್ಕಹಬ್ಬಕ್ಕಿಂತ ಮೊದಲೇ ತಮ್ಮ ಗ್ರಾಮಗಳಿಂದ ಅನೇಕ ಜನರು
ಜೆರುಸಲೇಮಿಗೆ ಹೋಗಿದ್ದರು. ವಿಶೇಷವಾದ ಕಾರ್ಯಗಳನ್ನು
ಮಾಡಿ ಪಸ್ಕಹಬ್ಬಕ್ಕಾಗಿ ತಮ್ಮನ್ನು ಶುದ್ಧೀಕರಿಸಿಕೊಳ್ಳಬೇಕೆಂದು
ಅವರು ಹೋಗಿದ್ದರು. 56ಅವರು ಅಲ್ಲಿ ಯೇಸುವನ್ನು ಹುಡುಕ
ತೊಡಗಿದರು. ಅವರು ದೇವಾಲಯದಲ್ಲಿ ನಿಂತುಕೊಂಡು,
‘‘ಆತನು ಹಬ್ಬಕ್ಕೆ ಬರುವನೇ? ನಿಮ್ಮ ಆಲೋಚನೆ ಏನು?’’
ಎಂದು ಒಬ್ಬರನ್ನೊಬ್ಬರು ಕೇಳುತ್ತಿದ್ದರು. 57ಆದರೆ ಮಹಾ
ಯಾಜಕರು ಮತ್ತು ಫರಿಸಾಯರು, ಯೇಸು ಎಲ್ಲಿದ್ದಾನೆಂಬುದು
ಯಾರಿಗಾದರೂ ತಿಳಿದು ಬಂದರೆ ತಮಗೆ ತಿಳಿಸಬೇಕೆಂಬ
ವಿಶೇಷ ಆಜ್ಞೆಯನ್ನು ಪ್ರಕಟಿಸಿದ್ದರು. ಅವರು ಆತನನ್ನು
ಬಂಧಿಸಬೇಕೆಂದಿದ್ದರು.

## ಬೆಥಾನಿಯಲ್ಲಿ ಯೇಸು

(ಮತ್ತಾಯ 26:6-13; ಮಾರ್ಕ 14:3-9)

12 ಪಸ್ಕಹಬ್ಬಕ್ಕೆ ಇನ್ನೂ ಆರು ದಿನಗಳಿದ್ದಾಗ ಯೇಸು
ಬೆಥಾನಿಗೆ ಹೋದನು. ಲಾಜರನು ವಾಸವಾಗಿದ್ದ
ಊರೇ ಬೆಥಾನಿ. (ಯೇಸು ಸತ್ತವರೊಳಗಿಂದ ಎಬ್ಬಿಸಿದ
ಮನುಷ್ಯನೇ ಲಾಜರನು.) 2ಅವರು ಯೇಸುವಿಗೆ ರಾತ್ರಿ
ಭೋಜನವನ್ನು ಏರ್ಪಡಿಸಿದ್ದರು. ಮಾರ್ಥಳು ಊಟವನ್ನು
ಬಡಿಸುತ್ತಿದ್ದಳು. ಯೇಸುವಿನೊಂದಿಗೆ ಊಟ ಮಾಡುತ್ತಿದ್ದ
ವರಲ್ಲಿ ಲಾಜರನೂ ಒಬ್ಬನಾಗಿದ್ದನು. 3ಆಗ ಮರಿಯಳು, ಬಹು
ಬೆಲೆಬಾಳುವ ಸುಗಂಧ ತೈಲವನ್ನು* ಅರ್ಧ ಲೀಟರಿನಷ್ಟು
ತೆಗೆದುಕೊಂಡು ಬಂದು, ಯೇಸುವಿನ ಪಾದಗಳಿಗೆ ಹಚ್ಚಿದಳು.
ಬಳಿಕ ತನ್ನ ತಲೆಕೂದಲಿನಿಂದ ಆತನ ಪಾದಗಳನ್ನು ಒರಸಿದಳು.
ಆ ಪರಿಮಳ ದ್ರವ್ಯದ ಸುವಾಸನೆಯು ಇಡೀ ಮನೆಯನ್ನೇ
ತುಂಬಿಕೊಂಡಿತು.
4ಇಸ್ಕರಿಯೋತ ಯೂದನು ಅಲ್ಲಿದ್ದನು. ಅವನು ಯೇಸು
ವಿನ ಶಿಷ್ಯರಲ್ಲಿ ಒಬ್ಬನಾಗಿದ್ದನು. (ಮುಂದೆ, ಯೇಸುವಿಗೆ
ದ್ರೋಹ ಮಾಡಿದವನು ಇವನೇ.) ಮರಿಯಳು ಮಾಡಿದ ಈ
ಕಾರ್ಯವನ್ನು ಯೂದನು ಇಷ್ಟಪಡಲಿಲ್ಲ. 5ಅವನು, ‘‘ಆ
ಪರಿಮಳ ದ್ರವ್ಯದ ಬೆಲೆ ಮುನ್ನೂರು ಬೆಳ್ಳಿನಾಣ್ಯಗಳು.*
ಅದನ್ನು ಮಾರಿ ಆ ಹಣವನ್ನು ಬಡವರಿಗೆ ಕೊಡಬೇಕಿತ್ತು’’
ಎಂದು ಟೀಕಿಸಿದನು. 6ಆದರೆ ಯೂದನಿಗೆ ಬಡವರ ಬಗ್ಗೆ
ನಿಜವಾಗಿಯೂ ಚಿಂತೆಯಿರಲಿಲ್ಲ. ಅವನು ಕಳ್ಳನಾಗಿದ್ದುದರಿಂದ
ಹಾಗೆ ಹೇಳಿದನು. ಶಿಷ್ಯಸಮುದಾಯಕ್ಕೋಸ್ಕರವಿದ್ದ ಹಣದ
ಪೆಟ್ಟಿಗೆಯು ಅವನ ವಶದಲ್ಲಿತ್ತು. ಅವನು ಆಗಾಗ್ಗೆ ಆ ಪೆಟ್ಟಿಗೆ
ಯಿಂದ ಹಣವನ್ನು ಕದ್ದುಕೊಳ್ಳುತ್ತಿದ್ದನು.
7ಯೇಸು ಅವನಿಗೆ, ‘‘ಆಕೆಯನ್ನು ತಡೆಯಬೇಡ. ನನ್ನನ್ನು
ಶವಸಂಸ್ಕಾರಕ್ಕೆ ಸಿದ್ಧಪಡಿಸುವ ಈ ದಿನಕ್ಕೋಸ್ಕರ ಆಕೆ ಸುಗಂಧ

---

**ಸುಗಂಧ ತೈಲ** ನಾರ್ಡ್ ಗಿಡದ ಅಪ್ಪಟ ಬೇರಿನಿಂದ ಮಾಡಿದ ಅತ್ಯಂತ ಬೆಲೆಬಾಳುವ ತೈಲ.

**ಬೆಳ್ಳಿನಾಣ್ಯ** ಮೂಲ ದಿನಾರಿ. ಒಬ್ಬ ಕೆಲಸಗಾರನ ಒಂದು ದಿನದ ಸಂಬಳ.

ದ್ರವ್ಯವನ್ನು ಶೇಖರಿಸಿದ್ದು ಒಳ್ಳೆಯದೇ ಸರಿ. 8ಬಡವರು ಯಾವಾ
ಗಲೂ ನಿಮ್ಮೊಂದಿಗಿರುತ್ತಾರೆ, ಆದರೆ ನಾನು ನಿಮ್ಮೊಂದಿಗೆ
ಯಾವಾಗಲೂ ಇರುವುದಿಲ್ಲ'' ಎಂದು ಉತ್ತರಕೊಟ್ಟನು.

### ಲಾಜರನ ವಿರುದ್ಧ ಸಂಚು

9ಯೇಸು ಬೆಥಾನಿಯಲ್ಲಿದ್ದಾನೆ ಎಂಬ ಸುದ್ದಿಯನ್ನು ಅನೇಕ
ಯೆಹೂದ್ಯರು ಕೇಳಿ ಆತನನ್ನೂ ಲಾಜರನನ್ನೂ ನೋಡ
ಬೇಕೆಂದು ಅಲ್ಲಿಗೆ ಹೋದರು. ಯೇಸುವಿನಿಂದ ಜೀವಂತವಾಗಿ
ಎಬ್ಬಿಸಲ್ಪಟ್ಟವನೇ ಲಾಜರನು. 10ಆದರೆ ಮಹಾಯಾಜಕರು
ಲಾಜರನನ್ನು ಸಹ ಕೊಲ್ಲಲು ಯೋಜನೆಗಳನ್ನು ಮಾಡಿದರು.
11ಲಾಜರನ ನಿಮಿತ್ತ ಅನೇಕ ಯೆಹೂದ್ಯರು ತಮ್ಮ ನಾಯಕ
ರನ್ನು ತೊರೆದು ಯೇಸುವಿನಲ್ಲಿ ನಂಬಿಕೆ ಇಡುತ್ತಿದ್ದರು. ಆದ
ಕಾರಣವೇ ಯೆಹೂದ್ಯ ನಾಯಕರು ಲಾಜರನನ್ನು ಸಹ ಕೊಲ್ಲ
ಬೇಕೆಂದಿದ್ದರು.

### ಜೆರುಸಲೇಮಿಗೆ ಯೇಸುವಿನ ಪ್ರವೇಶ

(ಮತ್ತಾಯ 21:1-11; ಮಾರ್ಕ 11:1-11; ಲೂಕ 19:28-40)

12ಮರುದಿನ, ಯೇಸು ಜೆರುಸಲೇಮಿಗೆ ಬರುತ್ತಿದ್ದಾನೆ
ಎಂಬ ಸುದ್ದಿ ಅಲ್ಲಿಯ ಜನರಿಗೆ ತಿಳಿಯಿತು. ಪಸ್ಕಹಬ್ಬಕ್ಕಾಗಿ
ಬಂದಿದ್ದ ಅನೇಕರು ಅಲ್ಲಿದ್ದರು. 13ಜನರು ಖರ್ಜೂರದ
ಗರಿಗಳನ್ನು ತೆಗೆದುಕೊಂಡು ಯೇಸುವನ್ನು ಎದುರುಗೊಳ್ಳಲು
ಹೋದರು.

> ''ಆತನಿಗೆ ಸ್ತೋತ್ರವಾಗಲಿ! ಪ್ರಭುವಿನ ಹೆಸರಿನಲ್ಲಿ
> ಬರುವಾತನಿಗೆ ದೇವರಾಶೀರ್ವಾದವಾಗಲಿ!
> ಇಸ್ರೇಲ್ ರಾಜನಿಗೆ ದೇವರಾಶೀರ್ವಾದ
> ವಾಗಲಿ!''
>
> *ಕೀರ್ತನೆ 118:25-26*

ಎಂದು ಜನರು ಕೂಗಿದರು.

14ಯೇಸು ಅಲ್ಲಿದ್ದ ಕತ್ತೆಯೊಂದನ್ನು ಕಂಡು, ಅದರ ಮೇಲೆ
ಕುಳಿತುಕೊಂಡು ಹೊರಟನು. ಪವಿತ್ರ ಗ್ರಂಥ ಹೇಳುವಂತೆಯೇ
ಇದು ನೆರವೇರಿತು:

> 15''ಸಿಯೋನ್ ನಗರವೇ, ಭಯಪಡಬೇಡ!
> ನೋಡು! ನಿನ್ನ ರಾಜನು ಬರುತ್ತಿದ್ದಾನೆ. ಆತನು
> ಪ್ರಾಯದ ಕತ್ತೆಯ ಮೇಲೆ ಕುಳಿತುಕೊಂಡು
> ಬರುತ್ತಿದ್ದಾನೆ.''
>
> *ಜಕರ್ಯ 9:9*

16ಯೇಸುವಿನ ಶಿಷ್ಯರು ಆ ಸಮಯದಲ್ಲಿ ಇದನ್ನು
ಅರ್ಥಮಾಡಿಕೊಳ್ಳಲಿಲ್ಲ. ಆದರೆ ಯೇಸು ಮಹಿಮಾಪದವಿಗೆ
ಏರಿಹೋದ ನಂತರ, ಈ ಸಂಗತಿಗಳು ಆತನ ವಿಷಯವಾಗಿ
ಬರೆಯಲ್ಪಟ್ಟಿವೆ ಎಂಬುದನ್ನು ಶಿಷ್ಯರು ಅರ್ಥಮಾಡಿಕೊಂಡರು;
ಮತ್ತು ತಾವು ಆತನಿಗಾಗಿ ಮಾಡಿದ ಕಾರ್ಯಗಳನ್ನು
ಜ್ಞಾಪಿಸಿಕೊಂಡರು.

### ಯೇಸುವಿನ ಬಗ್ಗೆ ಜನರ ಹೇಳಿಕೆ

17ಯೇಸು ಲಾಜರನಿಗೆ ಸಮಾಧಿಯೊಳಗಿಂದ ಬರುವಂತೆ
ಹೇಳಿ ಅವನನ್ನು ಜೀವಂತವಾಗಿ ಎಬ್ಬಿಸಿದಾಗ ಅನೇಕ ಜನರು
ಯೇಸುವಿನ ಸಂಗಡ ಇದ್ದರು. ಯೇಸು ಮಾಡಿದ ಈ ಕಾರ್ಯದ
ಬಗ್ಗೆ ಅವರು ಇತರರಿಗೆ ಹೇಳುತ್ತಿದ್ದರು. 18ಯೇಸು ಮಾಡಿದ
ಈ ಅದ್ಭುತ ಕಾರ್ಯವನ್ನು ಕೇಳಿ, ಅನೇಕ ಜನರು ಯೇಸುವನ್ನು
ಎದುರುಗೊಳ್ಳಲು ಹೋಗಿದ್ದರು. 19ಆದ್ದರಿಂದ ಫರಿಸಾಯರು,
''ನೋಡಿ! ನಮ್ಮ ಯೋಜನೆಯು ನಿಷ್ಪ್ರಯೋಜಕವಾಯಿತು.
ಜನರು ಆತನನ್ನೇ ಹಿಂಬಾಲಿಸುತ್ತಿದ್ದಾರೆ!'' ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು.

### ಜೀವ, ಮರಣಗಳ ಬಗ್ಗೆ ಯೇಸುವಿನ ಉಪದೇಶ

20ಅಲ್ಲಿ ಕೆಲವು ಗ್ರೀಕ್ ಜನರು ಸಹ ಇದ್ದರು. ಪಸ್ಕಹಬ್ಬದಲ್ಲಿ
ಆರಾಧಿಸುವುದಕ್ಕಾಗಿ ಜೆರುಸಲೇಮಿಗೆ ಹೋಗಿದ್ದವರಲ್ಲಿ
ಇವರೂ ಸೇರಿದ್ದರು. 21ಈ ಗ್ರೀಕ್ ಜನರು ಫಿಲಿಪ್ಪನ ಬಳಿಗೆ
ಹೋದರು. (ಫಿಲಿಪ್ಪನು ಗಲಿಲೇಯದ ಬೆತ್ಸಾಯಿ ಎಂಬ
ಊರಿನವನಾಗಿದ್ದನು.) ಅವರು, ''ಸ್ವಾಮೀ, ನಾವು ಯೇಸು
ವನ್ನು ನೋಡಬೇಕು'' ಎಂದು ಅವನನ್ನು ಕೇಳಿಕೊಂಡರು.
22ಫಿಲಿಪ್ಪನು ಅಂದ್ರೆಯನ ಬಳಿಗೆ ಹೋಗಿ ಈ ವಿಷಯವನ್ನು
ತಿಳಿಸಿದನು. ಬಳಿಕ ಅಂದ್ರೆಯನು ಮತ್ತು ಫಿಲಿಪ್ಪನು ಒಟ್ಟಾಗಿ
ಯೇಸುವಿನ ಬಳಿಗೆ ಹೋಗಿ ಈ ವಿಷಯವನ್ನು ತಿಳಿಸಿದರು.
23ಯೇಸು ಅವರಿಗೆ, ''ಮನುಷ್ಯಕುಮಾರನು ತನ್ನ ಮಹಿಮೆ
ಯನ್ನು ಹೊಂದುವ ಸಮಯ ಇದೇ ಆಗಿದೆ. 24ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ಗೋಧಿಯ ಕಾಳು ಭೂಮಿಗೆ ಬಿದ್ದು
ಸಾಯಲೇಬೇಕು. ಬಳಿಕ ಅದು ಬೆಳೆದು ಅನೇಕ ಕಾಳುಗಳನ್ನು
ಫಲಿಸುವುದು. ಸಾಯದಿದ್ದರೆ, ಅದು ಯಾವಾಗಲೂ ಕೇವಲ
ಒಂದೇ ಕಾಳಾಗಿರುವುದು. 25ತನ್ನ ಸ್ವಂತ ಪ್ರಾಣವನ್ನು ಪ್ರೀತಿಸು
ವವನು ಅದನ್ನು ಕಳೆದುಕೊಳ್ಳುವನು. ಆದರೆ ಈ ಲೋಕದಲ್ಲಿ
ತನ್ನ ಪ್ರಾಣವನ್ನು ದ್ವೇಷಿಸುವವನು ಅದನ್ನು ಉಳಿಸಿಕೊಳ್ಳುವನು.
ಅವನು ನಿತ್ಯಜೀವವನ್ನು ಹೊಂದುವನು. 26ನನ್ನ ಸೇವೆ ಮಾಡು
ವವನು ನನ್ನನ್ನು ಹಿಂಬಾಲಿಸಬೇಕು. ಆಗ ನಾನು ಇರುವಲ್ಲೆಲ್ಲಾ
ನನ್ನ ಸೇವಕನು ಇರುವನು. ನನ್ನ ಸೇವೆ ಮಾಡುವ ಜನರನ್ನು
ನನ್ನ ತಂದೆಯು ಸನ್ಮಾನಿಸುವನು'' ಎಂದು ಹೇಳಿದನು.

### ತನ್ನ ಮರಣದ ಕುರಿತು ಯೇಸುವಿನ ಹೇಳಿಕೆ

27ಯೇಸು ಮಾತನ್ನು ಮುಂದುವರಿಸಿ, ''ನನ್ನ ಪ್ರಾಣವು
ತತ್ತರಿಸುತ್ತಿದೆ. ನಾನೇನು ಹೇಳಲಿ? 'ತಂದೆಯೇ, ನನ್ನನ್ನು ಈ
ಸಂಕಟಕಾಲದಿಂದ ರಕ್ಷಿಸು ಎನ್ನಬೇಕೇ?' ಇಲ್ಲ! ಸಂಕಟಪಡು
ವುದಕ್ಕೋಸ್ಕರವೇ ನಾನು ಬಂದಿದ್ದೇನೆ. 28ತಂದೆಯೇ, ನಿನ್ನ
ಹೆಸರನ್ನು ಮಹಿಮೆಪಡಿಸಿಕೊ!'' ಎಂದು ಹೇಳಿದನು.

ಆಗ ಪರಲೋಕದಿಂದ, ''ನನ್ನ ಹೆಸರನ್ನು ಮಹಿಮೆಪಡಿಸಿ
ಕೊಂಡಿದ್ದೇನೆ. ನಾನು ಮತ್ತೆ ಮಹಿಮೆಪಡಿಸಿಕೊಳ್ಳುವೆನು,''
ಎಂದು ವಾಣಿ ಆಯಿತು.

29ಅಲ್ಲಿ ನಿಂತಿದ್ದ ಜನರು ಈ ವಾಣಿಯನ್ನು ಕೇಳಿ ''ಅದು
ಗುಡುಗು'' ಎಂದರು.

ಆದರೆ ಇತರರು, ''ದೇವದೂತನೊಬ್ಬನು ಯೇಸುವಿ
ನೊಂದಿಗೆ ಮಾತಾಡಿದನು!'' ಎಂದರು.

30ಯೇಸು ಜನರಿಗೆ, ‘‘ಆ ವಾಣಿಯಾದದ್ದು ನನಗೋಸ್ಕರ
ವಲ್ಲ, ನಿಮಗೋಸ್ಕರ. 31ಈ ಲೋಕಕ್ಕೆ ತೀರ್ಪಾಗುವ ಕಾಲ
ಇದೇ ಆಗಿದೆ. ಈಗ ಈ ಲೋಕದ ಅಧಿಪತಿಯನ್ನು (ಸೈತಾನ)
ಹೊರಗೆ ದಬ್ಬಲಾಗುವುದು. 32ನಾನು ಭೂಮಿಯಿಂದ ಮೇಲಿ
ತ್ತಲ್ಪಡುವೆನು. ಆಗ ನಾನು ಎಲ್ಲಾ ಜನರನ್ನು ನನ್ನ ಬಳಿಗೆ
ಸೆಳೆದುಕೊಳ್ಳುವೆನು’’ ಎಂದು ಹೇಳಿದನು. 33ತಾನು ಸಾಯುವ
ರೀತಿಯನ್ನು ಯೇಸು ಈ ಮಾತಿನ ಮೂಲಕ ಸೂಚಿಸಿದನು.

34ಜನರು, ‘‘ಕ್ರಿಸ್ತನು ಸದಾಕಾಲ ಜೀವಿಸುತ್ತಾನೆ ಎಂದು
ನಮ್ಮ ಧರ್ಮಶಾಸ್ತ್ರವು ಹೇಳುತ್ತದೆ. ಹೀಗಿರಲಾಗಿ, ‘ಮನುಷ್ಯ
ಕುಮಾರನು ಮೇಲೆತ್ತಲ್ಪಡುವನು’ ಎಂದು ನೀನು ಹೇಳುವು
ದೇಕೆ? ಈ ಮನುಷ್ಯಕುಮಾರನು ಯಾರು?’’ ಎಂದು
ಕೇಳಿದರು.

35ಅದಕ್ಕೆ ಯೇಸು, ‘‘ಇನ್ನು ಸ್ವಲ್ಪಕಾಲ ಮಾತ್ರ ಬೆಳಕು
ನಿಮ್ಮೊಂದಿಗಿರುತ್ತದೆ. ಆದ್ದರಿಂದ ಬೆಳಕು ನಿಮ್ಮೊಂದಿಗೆ
ಇರುವಾಗಲೇ ನಡೆಯಿರಿ. ಆಗ ಕತ್ತಲೆಯು (ಪಾಪ) ನಿಮ್ಮನ್ನು
ಕವಿದುಕೊಳ್ಳುವುದಿಲ್ಲ. ಕತ್ತಲೆಯಲ್ಲಿ ನಡೆಯುವವನಿಗೆ ತಾನು
ಎಲ್ಲಿಗೆ ಹೋಗುತ್ತಿದ್ದೇನೆಂಬುದು ತಿಳಿಯದು. 36ಆದ್ದರಿಂದ
ನೀವು ಬೆಳಕನ್ನು ಇನ್ನೂ ಹೊಂದಿರುವಾಗಲೇ ಅದರಲ್ಲಿ ನಂಬಿಕೆ
ಇಡಿರಿ. ಆಗ ನೀವು ಬೆಳಕಿನವರಾಗುವಿರಿ’’ ಎಂದು ಹೇಳಿದನು.
ಈ ಸಂಗತಿಗಳನ್ನು ಹೇಳಿದ ಮೇಲೆ ಯೇಸು ಅಲ್ಲಿಂದ ಹೊರಟು,
ತನ್ನನ್ನು ಜನರು ಕಂಡುಕೊಳ್ಳಲಾಗದ ಸ್ಥಳಕ್ಕೆ ಹೋದನು.

### ಯೆಹೂದ್ಯರ ಅಪನಂಬಿಕೆ

37ಯೇಸು ಅನೇಕ ಮಹತ್ಕಾರ್ಯಗಳನ್ನು ಮಾಡಿದನು.
ಜನರು ಆ ಕಾರ್ಯಗಳನ್ನೆಲ್ಲಾ ನೋಡಿದರೂ ಆತನಲ್ಲಿ ನಂಬಿಕೆ
ಇಡಲಿಲ್ಲ. 38ಇದರಿಂದಾಗಿ, ಪ್ರವಾದಿಯಾದ ಯೆಶಾಯನು
ಹೇಳಿದ್ದ ಮಾತುಗಳು ನೆರವೇರಿದವು. ಅದೇನೆಂದರೆ:

‘‘ಪ್ರಭುವೇ, ನಾವು ಹೇಳಿದ ಸಂಗತಿಗಳನ್ನು ಯಾರು
ನಂಬಿದರು? ಪ್ರಭುವಿನ ಬಾಹುಬಲವು ಯಾರಿಗೆ
ಗೋಚರವಾಯಿತು?’’

*ಯೆಶಾಯ 53:1*

39ಆದಕಾರಣವೇ ಜನರು ನಂಬಲಾಗಲಿಲ್ಲ. ಏಕೆಂದರೆ
ಯೆಶಾಯನು ಮತ್ತೊಂದು ಕಡೆಯಲ್ಲಿ ಹೀಗೆ ಹೇಳಿದ್ದಾನೆ:

40‘‘ತಮ್ಮ ಕಣ್ಣುಗಳಿಂದ ಕಾಣದಂತೆ ತಮ್ಮ ಮನಸ್ಸು
ಗಳಿಂದ ಅರ್ಥಮಾಡಿಕೊಳ್ಳದಂತೆ ಪರಿವರ್ತನೆ
ಗೊಂಡು ಗುಣಹೊಂದದಂತೆ ಆತನು ಅವರನ್ನು
ಕುರುಡರನ್ನಾಗಿ ಮಾಡಿದ್ದಾನೆ, ಅವರ ಮನಸ್ಸು
ಗಳನ್ನು ಕಲ್ಲಾಗಿಸಿದ್ದಾನೆ.’’

*ಯೆಶಾಯ 6:10*

41ಯೆಶಾಯನು ಆತನ (ಯೇಸುವಿನ) ಮಹಿಮೆಯನ್ನು
ನೋಡಿದ್ದರಿಂದಲೇ ಹೀಗೆ ಹೇಳಿದನು.

42ಆದರೆ ಅನೇಕ ಜನರು ಯೇಸುವಿನಲ್ಲಿ ನಂಬಿಕೆ ಇಟ್ಟರು.
ಅನೇಕ ಯೆಹೂದ್ಯನಾಯಕರು ಸಹ ಯೇಸುವಿನಲ್ಲಿ ನಂಬಿಕೆ
ಯಿಟ್ಟರು. ಆದರೆ ಅವರು ಫರಿಸಾಯರಿಗೆ ಹೆದರಿಕೊಂಡು ತಮ್ಮ
ನಂಬಿಕೆಯನ್ನು ಬಹಿರಂಗಪಡಿಸಲಿಲ್ಲ. ತಮ್ಮನ್ನು ಫರಿಸಾಯರು
ಸಭಾಮಂದಿರದಿಂದ ಬಹಿಷ್ಕರಿಸುತ್ತಾರೆ ಎಂಬ ಭಯ ಅವರಿ
ಗಿತ್ತು. 43ಈ ಜನರು ದೇವರ ಹೊಗಳಿಕೆಗಿಂತಲೂ ಜನರ
ಹೊಗಳಿಕೆಯನ್ನೇ ಹೆಚ್ಚಾಗಿ ಪ್ರೀತಿಸಿದರು.

### ಯೇಸುವಿನ ಉಪದೇಶ ಜನರಿಗೆ ತೀರ್ಪು ಮಾಡುವುದು

44ಬಳಿಕ ಯೇಸು ಗಟ್ಟಿಯಾಗಿ ಇಂತೆಂದನು: ‘‘ನನ್ನಲ್ಲಿ
ನಂಬಿಕೆ ಇಡುವವನು ನನ್ನನ್ನು ಕಳುಹಿಸಿದಾತನಲ್ಲಿ (ದೇವರು)
ನಿಜವಾಗಿಯೂ ನಂಬಿಕೆ ಇಡುವವನಾಗಿದ್ದಾನೆ. 45ನನ್ನನ್ನು
ನೋಡುವವನು ನನ್ನನ್ನು ಕಳುಹಿಸಿದಾತನನ್ನು ನಿಜವಾಗಿಯೂ
ನೋಡುವವನಾಗಿದ್ದಾನೆ. 46ನಾನೇ ಬೆಳಕಾಗಿದ್ದೇನೆ. ನನ್ನಲ್ಲಿ
ನಂಬಿಕೆ ಇಡುವವರು ಕತ್ತಲೆಯಲ್ಲಿ ಇರಬಾರದೆಂದು ನಾನೇ ಈ
ಲೋಕಕ್ಕೆ ಬಂದಿದ್ದೇನೆ.

47‘‘ನಾನು ಈ ಲೋಕಕ್ಕೆ ಬಂದದ್ದು ಜನರಿಗೆ ತೀರ್ಪು
ಮಾಡುವುದಕ್ಕಾಗಿಯಲ್ಲ. ಈ ಲೋಕದಲ್ಲಿರುವ ಜನರನ್ನು
ರಕ್ಷಿಸುವುದಕ್ಕಾಗಿ ನಾನು ಬಂದೆನು. ಆದ್ದರಿಂದ ನನ್ನ ಮಾತು
ಗಳನ್ನು ಕೇಳಿಯೂ ನಂಬದಿರುವ ಜನರಿಗೆ ತೀರ್ಪು ಮಾಡು
ವವನು ನಾನಲ್ಲ. 48ನನ್ನಲ್ಲಿ ನಂಬಿಕೆ ಇಡದಿರುವವನಿಗೆ ಮತ್ತು
ನಾನು ಹೇಳುವುದನ್ನು ತಿರಸ್ಕರಿಸುವವನಿಗೆ ತೀರ್ಪು
ಮಾಡುವಂಥದ್ದು ನಾನು ಆಡಿದ ಮಾತುಗಳೇ. ಅಂತಿಮ ದಿನ
ದಂದು ಅವೇ ಅವನಿಗೆ ತೀರ್ಪು ಮಾಡುತ್ತವೆ. 49ಏಕೆಂದರೆ, ನನ್ನ
ಮಾತುಗಳು ನನ್ನಿಂದ ಬಂದವುಗಳಲ್ಲ. ನನ್ನನ್ನು ಕಳುಹಿಸಿದ
ತಂದೆಯೇ ನಾನು ಏನು ಹೇಳಬೇಕು, ಏನು ಮಾತಾಡಬೇಕು
ಎಂದು ನನಗೆ ಹೇಳಿಕೊಟ್ಟಿದ್ದಾನೆ. 50ತಂದೆಯ ಆಜ್ಞೆಯು
ನಿತ್ಯಜೀವಕ್ಕೆ ನಡೆಸುತ್ತದೆ ಎಂದು ನಾನು ಬಲ್ಲೆನು. ಆದ್ದರಿಂದ
ತಂದೆಯು ನನಗೆ ಹೇಳಿಕೊಟ್ಟ ಸಂಗತಿಗಳನ್ನೇ ನಾನು
ತಿಳಿಸುತ್ತೇನೆ.’’

### ಯೇಸು ತನ್ನ ಶಿಷ್ಯರ ಪಾದಗಳನ್ನು ತೊಳೆಯುವನು

13 ಯೆಹೂದ್ಯರ ಪಸ್ಕಹಬ್ಬವು ಬಹು ಸಮೀಪವಾಗಿತ್ತು.
ತಾನು ಈ ಲೋಕವನ್ನು ಬಿಟ್ಟು ತಂದೆಯ ಬಳಿಗೆ
ಹೋಗುವ ಸಮಯ ಬಂದಿರುವುದಾಗಿ ಯೇಸುವಿಗೆ ತಿಳಿದಿತ್ತು.
ಈ ಲೋಕದಲ್ಲಿದ್ದ ತನ್ನವರನ್ನು ಆತನು ಯಾವಾಗಲೂ ಪ್ರೀತಿಸು
ತ್ತಿದ್ದನು. ಈಗಲಾದರೋ ಅವರ ಮೇಲೆ ತನಗಿರುವ ಅಪಾರ
ಪ್ರೀತಿಯನ್ನು ತೋರಿಸುವ ಕಾಲ ಆತನಿಗೆ ಬಂದಿತ್ತು.

2ಯೇಸು ಮತ್ತು ಆತನ ಶಿಷ್ಯರು ರಾತ್ರಿಯ ಊಟಕ್ಕಾಗಿ
ಕುಳಿತುಕೊಂಡಿದ್ದರು. ಯೇಸುವಿಗೆ ದ್ರೋಹ ಮಾಡುವಂತೆ
ಸೈತಾನನು ಇಸ್ಕರಿಯೋತ ಯೂದನನ್ನು ಈಗಾಗಲೇ ಪ್ರೇರೇಪಿ
ಸಿದ್ದನು. (ಯೂದನು ಸಿಮೋನನ ಮಗ.) 3ತಂದೆಯು ಪ್ರತಿ
ಯೊಂದರ ಮೇಲೆ ತನಗೆ ಅಧಿಕಾರವನ್ನು ಕೊಟ್ಟಿದ್ದಾನೆಂಬುದು
ಯೇಸುವಿಗೆ ತಿಳಿದಿತ್ತು. ಅಲ್ಲದೆ ತಾನು ದೇವರ ಬಳಿಯಿಂದ
ಬಂದಿರುವುದಾಗಿಯೂ ಮತ್ತು ಈಗ ದೇವರ ಬಳಿಗೆ ಮರಳಿ
ಹೋಗುತ್ತಿರುವುದಾಗಿಯೂ ಆತನಿಗೆ ಗೊತ್ತಿತ್ತು. 4ಅವರು
ಊಟ ಮಾಡುತ್ತಿದ್ದಾಗ ಯೇಸು ಎದ್ದು ತನ್ನ ಮೇಲಂಗಿಯನ್ನು
ತೆಗೆದಿಟ್ಟನು; ಅಂಗವಸ್ತ್ರವನ್ನು ಸೊಂಟಕ್ಕೆ ಕಟ್ಟಿಕೊಂಡನು.
5ಅನಂತರ ಒಂದು ಬೋಗುಣಿಗೆ ನೀರು ಸುರಿದುಕೊಂಡು

ಶಿಷ್ಯರ ಕಾಲುಗಳನ್ನು ತೊಳೆದು ತಾನು ಕಟ್ಟಿಕೊಂಡಿದ್ದ ಅಂಗ
ವಸ್ತ್ರದಿಂದ ಅವರ ಪಾದಗಳನ್ನು ಒರಸಿದನು.
6ಯೇಸು ಸೀಮೋನ್ ಪೇತ್ರನ ಬಳಿಗೆ ಬಂದಾಗ ಪೇತ್ರನು,
‘‘ಪ್ರಭುವೇ, ನನ್ನ ಪಾದಗಳನ್ನು ನೀನು ತೊಳೆಯಕೂಡದು’’
ಎಂದನು.
7ಯೇಸು, ‘‘ಈಗ ನಾನು ಏನು ಮಾಡುತ್ತಿರುವೆನೆಂದು
ನಿನಗೆ ಗೊತ್ತಿಲ್ಲ. ಆದರೆ ಮುಂದೆ ನೀನು ಅರ್ಥಮಾಡಿ
ಕೊಳ್ಳುವೆ’’ ಎಂದು ಉತ್ತರಕೊಟ್ಟನು.
8ಪೇತ್ರನು, ‘‘ಇಲ್ಲ! ನನ್ನ ಪಾದಗಳನ್ನು ನೀನು ಎಂದಿಗೂ
ತೊಳೆಯಕೂಡದು’’ ಎಂದು ಪ್ರತಿಭಟಿಸಿದನು.
ಯೇಸು, ‘‘ನಿನ್ನ ಪಾದಗಳನ್ನು ನಾನು ತೊಳೆಯದಿದ್ದರೆ,
ನನ್ನಲ್ಲಿ ನಿನಗೆ ಪಾಲು ಇಲ್ಲ’’ ಎಂದು ಹೇಳಿದನು.
9ಆಗ ಸೀಮೋನ್ ಪೇತ್ರನು, ‘‘ಪ್ರಭುವೇ, ನನ್ನ ಪಾದ
ಗಳನ್ನು ಮಾತ್ರವಲ್ಲದೆ ನನ್ನ ಕೈಗಳನ್ನು ಮತ್ತು ತಲೆಯನ್ನೂ
ತೊಳೆ!’’ ಎಂದು ಕೇಳಿಕೊಂಡನು.
10ಯೇಸು, ‘‘ಸ್ನಾನಮಾಡಿಕೊಂಡವನ ದೇಹವೆಲ್ಲಾ ಶುದ್ಧ
ವಾಗಿರುತ್ತದೆ. ಅವನು ತನ್ನ ಪಾದಗಳನ್ನು ತೊಳೆದುಕೊಂಡರೆ
ಸಾಕು. ನೀವು ಸಹ ಶುದ್ಧರಾಗಿದ್ದೀರಿ, ಆದರೆ ನಿಮ್ಮಲ್ಲಿ
ಪ್ರತಿಯೊಬ್ಬನೂ ಶುದ್ಧನಲ್ಲ’’ ಎಂದು ಹೇಳಿದನು. 11ತನಗೆ
ದ್ರೋಹ ಮಾಡುವ ವ್ಯಕ್ತಿ ಯಾರೆಂದು ಯೇಸುವಿಗೆ ತಿಳಿದಿತ್ತು.
ಆದಕಾರಣ ಆತನು, ‘‘ನಿಮ್ಮಲ್ಲಿ ಪ್ರತಿಯೊಬ್ಬನೂ ಶುದ್ಧನಲ್ಲ’’
ಎಂದು ಹೇಳಿದನು.
12ಯೇಸು ಅವರ ಪಾದಗಳನ್ನು ತೊಳೆದ ಮೇಲೆ ತನ್ನ
ಮೇಲಂಗಿಯನ್ನು ಧರಿಸಿಕೊಂಡು ಮತ್ತೆ ಕುಳಿತುಕೊಂಡು
ಇಂತೆಂದನು:‘‘ನಾನು ನಿಮಗೆ ಮಾಡಿದ್ದು ಏನೆಂದು ಅರ್ಥ
ವಾಯಿತೇ? 13ನೀವು ನನ್ನನ್ನು, ‘ಗುರುವೇ, ಪ್ರಭುವೇ’ ಎಂದು
ಕರೆಯುತ್ತೀರಿ. ನೀವು ಹಾಗೆ ಕರೆಯುವುದು ಸರಿ. ಏಕೆಂದರೆ
ನಾನು ಗುರುವೂ ಹೌದು, ಪ್ರಭುವೂ ಹೌದು. 14ನಿಮ್ಮ
ಪ್ರಭುವೂ ಗುರುವೂ ಆಗಿರುವ ನಾನು ನಿಮ್ಮ ಪಾದಗಳನ್ನು
ಸೇವಕನಂತೆ ತೊಳೆದೆನು. ಆದ್ದರಿಂದ ನೀವು ಸಹ ಒಬ್ಬರ
ಪಾದಗಳನ್ನು ಇನ್ನೊಬ್ಬರು ತೊಳೆಯಬೇಕು. 15ಈ ಕಾರ್ಯಕ್ಕೆ
ನಾನೇ ನಿಮಗೆ ಮಾದರಿಯಾಗಿದ್ದೇನೆ. ನಾನು ನಿಮಗೆ ಮಾಡಿ
ದಂತೆ ನೀವೂ ಒಬ್ಬರಿಗೊಬ್ಬರು ಮಾಡಬೇಕು. 16ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ಸೇವಕನು ಒಡೆಯನಿಗಿಂತ ದೊಡ್ಡವ
ನಲ್ಲ. ಆದ್ದರಿಂದ ಕೆಲಸಕ್ಕಾಗಿ ಕಳುಹಿಸಲ್ಪಟ್ಟವನು ಕಳುಹಿಸಿದವ
ನಿಗಿಂತ ದೊಡ್ಡವನಲ್ಲ. 17ನೀವು ಈ ಸಂಗತಿಗಳನ್ನು ತಿಳಿದು
ಕೊಂಡು ಇವುಗಳನ್ನು ಕೈಕೊಂಡು ನಡೆದರೆ ಸಂತೋಷ
ದಿಂದಿರುವಿರಿ.
18‘‘ನಾನು ನಿಮ್ಮೆಲ್ಲರ ಬಗ್ಗೆ ಮಾತಾಡುತ್ತಿಲ್ಲ. ನಾನು
ಆರಿಸಿಕೊಂಡಿರುವ ಜನರ ಬಗ್ಗೆ ನನಗೆ ಗೊತ್ತಿದೆ. ಆದರೆ
‘ನನ್ನೊಂದಿಗೆ ಊಟ ಮಾಡುವವನೇ ನನಗೆ ದ್ರೋಹ
ಬಗೆದನು.’* ಎಂಬ ಪವಿತ್ರಗ್ರಂಥದ ಮಾತು ನೆರವೇರಬೇಕು.
19ಅದು ನೆರವೇರುವಾಗ ನಾನೇ ಕ್ರಿಸ್ತನೆಂದು ನೀವು ನಂಬ
ಬೇಕೆಂದು, ಅದು ನೆರವೇರುವುದಕ್ಕಿಂತ ಮೊದಲೇ ಅದನ್ನು
ನಿಮಗೆ ತಿಳಿಸುತ್ತಿದ್ದೇನೆ. 20ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನಾನು ಕಳುಹಿಸುವ ಯಾರನ್ನಾದರೂ ಸ್ವೀಕರಿಸಿ
ಕೊಳ್ಳುವವನು ನನ್ನನ್ನೇ ಸ್ವೀಕರಿಸಿಕೊಳ್ಳುವವನಾಗಿದ್ದಾನೆ.
ನನ್ನನ್ನು ಸ್ವೀಕರಿಸಿಕೊಳ್ಳುವವನು ನನ್ನನ್ನು ಕಳುಹಿಸಿದಾತನನ್ನೇ
ಸ್ವೀಕರಿಸಿಕೊಳ್ಳುವವನಾಗಿದ್ದಾನೆ.’’

### ಯೇಸುವಿನ ಶಿಷ್ಯನ ದ್ರೋಹ

(ಮತ್ತಾಯ 26:20-25; ಮಾರ್ಕ 14:17-21; ಲೂಕ 22:21-23)

21ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ ಆತ್ಮದಲ್ಲಿ
ತತ್ತರಗೊಂಡು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನಿಮ್ಮಲ್ಲಿ ಒಬ್ಬನು ನನಗೆ ದ್ರೋಹ ಮಾಡುವನು’’ ಎಂದು ಬಹಿ
ರಂಗವಾಗಿ ಹೇಳಿದನು.
22ಯೇಸುವಿನ ಶಿಷ್ಯರೆಲ್ಲಾ ಒಬ್ಬರನ್ನೊಬ್ಬರು ನೋಡತೊಡ
ಗಿದರು. ಆತನು ಯಾರ ಬಗ್ಗೆ ಮಾತಾಡುತ್ತಿದ್ದಾನೆಂದು ಅವರಿಗೆ
ಅರ್ಥವಾಗಲಿಲ್ಲ. 23ಶಿಷ್ಯರಲ್ಲಿ ಒಬ್ಬನು ಯೇಸುವಿನ ಸಮೀಪ
ದಲ್ಲಿ ಒರಗಿಕೊಂಡಿದ್ದನು. ಯೇಸು ಪ್ರೀತಿಸುತ್ತಿದ್ದ ಶಿಷ್ಯನೇ
ಅವನು.
24ಸೀಮೋನ್ ಪೇತ್ರನು ಈ ಶಿಷ್ಯನಿಗೆ, ಯಾರನ್ನು ಕುರಿತು
ಯೇಸು ಹೇಳುತ್ತಿದ್ದಾನೆಂದು ಕೇಳಿ ತಿಳಿದುಕೊಳ್ಳಲು
ಸನ್ನೆಮಾಡಿದನು.
25ಆ ಶಿಷ್ಯನು ಯೇಸುವಿನ ಸಮೀಪಕ್ಕೆ ಬಾಗಿಕೊಂಡು,
‘‘ಪ್ರಭುವೇ, ಅವನು ಯಾರು?’’ ಎಂದು ಕೇಳಿದನು.
26ಯೇಸು, ‘‘ನಾನು ಈ ರೊಟ್ಟಿಯನ್ನು ಬಟ್ಟಲಲ್ಲಿ ಅದ್ದಿ ಅದನ್ನು
ಯಾರಿಗೆ ಕೊಡುತ್ತೇನೋ ಅವನೇ ನನಗೆ ದ್ರೋಹ ಮಾಡು
ವನು’’ ಎಂದು ಹೇಳಿ ರೊಟ್ಟಿಯ ತುಂಡೊಂದನ್ನು ತೆಗೆದು
ಕೊಂಡು ಅದನ್ನು ಬಟ್ಟಲಲ್ಲಿ ಅದ್ದಿ ಸಿಮೋನನ ಮಗನಾದ
ಇಸ್ಕರಿಯೋತ ಯೂದನಿಗೆ ಕೊಟ್ಟನು. 27ಯೂದನು ಆ
ರೊಟ್ಟಿಯನ್ನು ತೆಗೆದುಕೊಂಡಾಗ ಸೈತಾನನು ಅವನೊಳಗೆ
ಪ್ರವೇಶಿಸಿದನು. ಯೇಸು ಯೂದನಿಗೆ, ‘‘ನೀನು ಮಾಡುವ
ಕೆಲಸವನ್ನು ಬೇಗನೆ ಮಾಡು!’’ ಎಂದು ಹೇಳಿದನು. 28ಯೇಸು
ಯೂದನಿಗೆ ಏಕೆ ಹಾಗೆ ಹೇಳಿದನೆಂದು ಊಟಕ್ಕೆ ಕುಳಿತಿದ್ದವ
ರಲ್ಲಿ ಯಾರಿಗೂ ಅರ್ಥವಾಗಲಿಲ್ಲ. 29ಆ ಶಿಷ್ಯ ಸಮುದಾಯದ
ಹಣದ ಪೆಟ್ಟಿಗೆಯು ಯೂದನ ವಶದಲ್ಲಿತ್ತು. ಆದ್ದರಿಂದ ಹಬ್ಬಕ್ಕೆ
ಅಗತ್ಯವಾದ ಕೆಲವು ವಸ್ತುಗಳನ್ನು ತೆಗೆದುಕೊಂಡು ಬರುವು
ದಕ್ಕಾಗಲಿ ಬಡಜನರಿಗೆ ಏನಾದರೂ ಕೊಡುವುದಕ್ಕಾಗಲಿ
ಯೇಸು ಅವನಿಗೆ ಹೇಳಿರಬೇಕೆಂದು ಕೆಲವು ಶಿಷ್ಯರು ಭಾವಿಸಿ
ಕೊಂಡರು. 30ಯೇಸು ಕೊಟ್ಟ ರೊಟ್ಟಿಯನ್ನು ತೆಗೆದುಕೊಂಡ
ನಂತರ ಯೂದನು ಅಲ್ಲಿಂದ ಹೊರಟುಹೋದನು. ಆಗ
ರಾತ್ರಿಯಾಗಿತ್ತು.

### ತನ್ನ ಮರಣದ ಬಗ್ಗೆ ಯೇಸುವಿನ ಪ್ರಕಟನೆ

31ಯೂದನು ಹೊರಟುಹೋದ ಮೇಲೆ ಯೇಸು, ‘‘ಈಗ
ಮನುಷ್ಯಕುಮಾರನಿಗೆ ಮಹಿಮೆಯಾಗುವುದು. ಅಲ್ಲದೆ,
ಮನುಷ್ಯಕುಮಾರನ ಮೂಲಕ ದೇವರಿಗೂ ಮಹಿಮೆ
ಯಾಗುವುದು. 32ಆತನ ಮೂಲಕವಾಗಿ ದೇವರಿಗೆ ಮಹಿಮೆ
ಯಾಗುವುದರಿಂದ ತಕ್ಷಣವೇ ದೇವರ ಮೂಲಕವಾಗಿಯೂ
ಆತನಿಗೆ ಮಹಿಮೆಯಾಗುವುದು’’ ಎಂದನು.
33ಯೇಸು, ‘‘ನನ್ನ ಮಕ್ಕಳೇ, ಇನ್ನು ಸ್ವಲ್ಪ ಸಮಯ ಮಾತ್ರ
ನಾನು ನಿಮ್ಮೊಂದಿಗೆ ಇರುತ್ತೇನೆ. ನೀವು ನನಗಾಗಿ ಹುಡುಕುವಿರಿ.

---

**ನನ್ನೊಂದಿಗೆ … ಬಗೆದನು** ಕೀರ್ತನೆ 41:9

ನಾನು ಯೆಹೂದ್ಯರಿಗೆ ಹೇಳಿದ್ದನ್ನು ನಿಮಗೂ ಹೇಳುತ್ತೇನೆ. ನಾನು ಹೋಗುವಲ್ಲಿಗೆ ನೀವು ಬರಲಾರಿರಿ.

34‘‘ನಾನು ನಿಮಗೆ ಹೊಸ ಆಜ್ಞೆಯನ್ನು ಕೊಡುತ್ತೇನೆ. ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕು. 35ನಾನು ನಿಮ್ಮನ್ನು ಪ್ರೀತಿಸಿದಂತೆಯೇ ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕು. ನೀವು ಒಬ್ಬರನ್ನೊಬ್ಬರು ಪ್ರೀತಿಸಿದರೆ, ನೀವು ನನ್ನ ಶಿಷ್ಯರೆಂಬುದನ್ನು ಎಲ್ಲಾ ಜನರು ತಿಳಿದುಕೊಳ್ಳುವರು’’ ಎಂದು ಹೇಳಿದನು.

### ಪೇತ್ರನ ವಿಶ್ವಾಸದ್ರೋಹದ ಮುನ್ಸೂಚನೆ

(ಮತ್ತಾಯ 26:31-35; ಮಾರ್ಕ 14:27-31; ಲೂಕ 22:31-34)

36ಸೀಮೋನ್ ಪೇತ್ರನು ಯೇಸುವಿಗೆ, ‘‘ಪ್ರಭುವೇ, ನೀನು ಎಲ್ಲಿಗೆ ಹೋಗುತ್ತಿರುವೆ?’’ ಎಂದು ಕೇಳಿದನು.

ಯೇಸು, ‘‘ನಾನು ಹೋಗುವಲ್ಲಿಗೆ ಈಗ ನೀನು ಹಿಂಬಾಲಿಸಿಕೊಂಡು ಬರಲಾರೆ. ಆದರೆ ಮುಂದೆ ನೀನು ಹಿಂಬಾಲಿಸಿಕೊಂಡು ಬರುವೆ’’ ಎಂದು ಉತ್ತರಕೊಟ್ಟನು.

37ಪೇತ್ರನು, ‘‘ಪ್ರಭುವೇ, ಈಗ ನಾನು ನಿನ್ನನ್ನು ಹಿಂಬಾಲಿಸಲು ಏಕಾಗದು? ನಿನಗೋಸ್ಕರ ಸಾಯುವುದಕ್ಕೂ ನನಗೆ ಮನಸ್ಸಿದೆ!’’ ಎಂದು ಹೇಳಿದನು.

38ಯೇಸು, ‘‘ನೀನು ನನಗೋಸ್ಕರ ನಿನ್ನ ಪ್ರಾಣವನ್ನು ನಿಜವಾಗಿಯೂ ಕೊಡುವಿಯಾ? ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ನಾಳೆ ಮುಂಜಾನೆ ಕೋಳಿ ಕೂಗುವುದಕ್ಕಿಂತ ಮುಂಚಿತವಾಗಿ ನೀನು ನನ್ನನ್ನು ತಿಳಿದಿಲ್ಲವೆಂದು ಮೂರು ಸಾರಿ ಹೇಳುವೆ’’ ಎಂದು ಉತ್ತರ ಕೊಟ್ಟನು.

### ಶಿಷ್ಯರಿಗೆ ಯೇಸುವಿನ ಆದರಣೆ ಮಾತುಗಳು

14 ಯೇಸು, ‘‘ನಿಮ್ಮ ಹೃದಯವು ಕಳವಳಗೊಳ್ಳದಿರಲಿ. ದೇವರಲ್ಲಿ ವಿಶ್ವಾಸವಿಡಿರಿ. ನನ್ನಲ್ಲಿಯೂ ವಿಶ್ವಾಸವಿಡಿರಿ. 2ನನ್ನ ತಂದೆಯ ಮನೆಯಲ್ಲಿ ಅನೇಕ ಕೋಣೆಗಳಿವೆ. ಅದು ಸತ್ಯವಲ್ಲದಿದ್ದರೆ, ನಾನು ನಿಮಗೆ ಹೇಳುತ್ತಿರಲಿಲ್ಲ. ನಾನು ನಿಮಗೋಸ್ಕರ ಸ್ಥಳವನ್ನು ಸಿದ್ಧಪಡಿಸಲು ಅಲ್ಲಿಗೆ ಹೋಗುತ್ತಿದ್ದೇನೆ. 3ನಾನು ಹೋಗಿ ನಿಮಗೋಸ್ಕರ ಸ್ಥಳವನ್ನು ಸಿದ್ಧಪಡಿಸಿದ ಮೇಲೆ ಹಿಂತಿರುಗಿ ಬಂದು, ನಿಮ್ಮನ್ನು ನನ್ನೊಂದಿಗೆ ಕರೆದುಕೊಂಡು ಹೋಗುವೆನು, ಏಕೆಂದರೆ ನಾನಿರುವಲ್ಲಿ ನೀವೂ ಇರಬೇಕು. 4ನಾನು ಹೋಗಲಿರುವ ಸ್ಥಳದ ದಾರಿಯು ನಿಮಗೆ ತಿಳಿದಿದೆ’’ ಎಂದು ಹೇಳಿದನು.

5ತೋಮನು ಯೇಸುವಿಗೆ, ‘‘ಪ್ರಭುವೇ, ನೀನು ಹೋಗುತ್ತಿರುವುದು ಎಲ್ಲಿಗೆಂಬುದೇ ನಮಗೆ ಗೊತ್ತಿಲ್ಲ. ಹೀಗಿರಲು, ಆ ದಾರಿಯನ್ನು ನಾವು ಹೇಗೆ ತಿಳಿದುಕೊಳ್ಳಲಾದೀತು?’’ ಎಂದನು.

6ಯೇಸು, ‘‘ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ. ತಂದೆಯ ಬಳಿಗೆ ಹೋಗಲು ನಾನೇ ಏಕೈಕ ಮಾರ್ಗ. 7ನೀವು ನನ್ನನ್ನು ನಿಜವಾಗಿಯೂ ತಿಳಿದಿದ್ದರೆ, ನನ್ನ ತಂದೆಯನ್ನು ಸಹ ತಿಳಿದುಕೊಳ್ಳುತ್ತಿದ್ದಿರಿ. ಆದರೆ ಈಗ ನೀವು ತಂದೆಯನ್ನು ತಿಳಿದಿದ್ದೀರಿ. ನೀವು ಆತನನ್ನು ನೋಡಿದ್ದೀರಿ’’ ಎಂದು ಹೇಳಿದನು.

8ಫಿಲಿಪ್ಪನು ಯೇಸುವಿಗೆ, ‘‘ಪ್ರಭುವೇ, ನಮಗೆ ತಂದೆಯನ್ನು ತೋರಿಸು. ನಮಗೆ ಅಷ್ಟೇ ಸಾಕು’’ ಎಂದು ಹೇಳಿದನು.

9ಯೇಸು, ‘‘ಫಿಲಿಪ್ಪನೇ, ನಾನು ಇಷ್ಟು ಕಾಲದಿಂದ ನಿನ್ನೊಂದಿಗಿದ್ದರೂ ನೀನು ನನ್ನನ್ನು ತಿಳಿದುಕೊಳ್ಳಲಿಲ್ಲವೇ? ನನ್ನನ್ನು ನೋಡಿದವನು ತಂದೆಯನ್ನು ಸಹ ನೋಡಿದವನಾಗಿದ್ದಾನೆ. ಆದ್ದರಿಂದ, ‘ತಂದೆಯನ್ನು ನಮಗೆ ತೋರಿಸು’ ಎಂದು ಏಕೆ ಕೇಳುವಿರಿ? 10ನಾನು ತಂದೆಯಲ್ಲಿದ್ದೇನೆ ಮತ್ತು ತಂದೆಯು ನನ್ನಲ್ಲಿದ್ದಾನೆ ಎಂದು ನೀವು ನಿಜವಾಗಿಯೂ ನಂಬುವಿರಾ? ನಾನು ನಿಮಗೆ ಹೇಳುವ ಸಂಗತಿಗಳು ನನ್ನಿಂದಲೇ ಬಂದಂಥವುಗಳಲ್ಲ. ತಂದೆಯು ನನ್ನಲ್ಲಿ ವಾಸವಾಗಿದ್ದಾನೆ ಮತ್ತು ಆತನು ತನ್ನ ಕಾರ್ಯವನ್ನು ಮಾಡುತ್ತಿದ್ದಾನೆ. 11ನಾನು ತಂದೆಯಲ್ಲಿದ್ದೇನೆ ಮತ್ತು ತಂದೆಯು ನನ್ನಲ್ಲಿದ್ದಾನೆ ಎಂಬ ನನ್ನ ಮಾತನ್ನು ನಂಬಿರಿ. ಅಥವಾ ನಾನು ಮಾಡಿದ ಅದ್ಭುತ ಕಾರ್ಯಗಳ ನಿಮಿತ್ತವಾದರೂ ನಂಬಿರಿ. 12ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನನ್ನಲ್ಲಿ ನಂಬಿಕೆ ಇಡುವ ವ್ಯಕ್ತಿಯು ನಾನು ಮಾಡಿದ ಕಾರ್ಯಗಳನ್ನೇ ಮಾಡುವನು. ಹೌದು ನಾನು ಮಾಡುವ ಕಾರ್ಯಗಳಿಗಿಂತಲೂ ಹೆಚ್ಚು ದೊಡ್ಡ ಕಾರ್ಯಗಳನ್ನು ಅವನು ಮಾಡುವನು. ಏಕೆಂದರೆ ನಾನು ತಂದೆಯ ಬಳಿಗೆ ಹೋಗುತ್ತಿದ್ದೇನೆ. 13ಮತ್ತು ನೀವು ನನ್ನ ಹೆಸರಿನಲ್ಲಿ ಏನಾದರೂ ಬೇಡಿಕೊಂಡರೆ, ನಾನು ನಿಮಗೋಸ್ಕರ ಅದನ್ನು ನೆರವೇರಿಸುವೆನು. ಆಗ ಮಗನ ಮೂಲಕವಾಗಿ ತಂದೆಗೆ ಮಹಿಮೆ ಆಗುವುದು. 14ನೀವು ನನ್ನ ಹೆಸರಿನಲ್ಲಿ ಏನಾದರೂ ಬೇಡಿಕೊಂಡರೆ, ನಾನು ಅದನ್ನು ನೆರವೇರಿಸುವೆನು.

### ಪವಿತ್ರಾತ್ಮನನ್ನು ಕೊಡುವುದಾಗಿ ವಾಗ್ದಾನ

15‘‘ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ, ನಾನು ಆಜ್ಞಾಪಿಸುವವುಗಳನ್ನು ಮಾಡುವಿರಿ. 16ನಾನು ತಂದೆಯನ್ನು ಕೇಳಿಕೊಳ್ಳುವೆನು, ಆಗ ಆತನು ಬೇರೊಬ್ಬ ಸಹಾಯಕನನ್ನು ನಿಮಗೆ ಕೊಡುವನು. ಆ ಸಹಾಯಕನು ಸದಾಕಾಲ ನಿಮ್ಮೊಂದಿಗಿರುವನು.

17‘‘ಸತ್ಯದ ಆತ್ಮನೇ ಈ ಸಹಾಯಕನು. ಈ ಲೋಕವು ಆತನನ್ನು ಸ್ವೀಕರಿಸಿಕೊಳ್ಳಲಾರದು. ಏಕೆಂದರೆ ಲೋಕವು ಆತನನ್ನು ಕಾಣುವುದೂ ಇಲ್ಲ. ತಿಳಿದುಕೊಳ್ಳುವುದೂ ಇಲ್ಲ. ಆದರೆ ನೀವು ಆತನನ್ನು ಬಲ್ಲಿರಿ. ಆತನು ನಿಮ್ಮೊಂದಿಗೆ ಮತ್ತು ನಿಮ್ಮೊಳಗೆ ವಾಸಿಸುವವನಾಗಿದ್ದಾನೆ.

18‘‘ನಾನು ನಿಮ್ಮನ್ನು ತಂದೆತಾಯಿಗಳಿಲ್ಲದ ಮಕ್ಕಳಂತೆ ಒಬ್ಬಂಟಿಗರನ್ನಾಗಿ ಬಿಟ್ಟುಹೋಗುವುದಿಲ್ಲ. ನಾನು ನಿಮ್ಮ ಬಳಿಗೆ ಬರುತ್ತೇನೆ. 19ಇನ್ನು ಸ್ವಲ್ಪ ಕಾಲವಾದ ಮೇಲೆ ಈ ಲೋಕದ ಜನರು ನನ್ನನ್ನು ಇನ್ನೆಂದಿಗೂ ಕಾಣುವುದಿಲ್ಲ. ಆದರೆ ನೀವು ನನ್ನನ್ನು ನೋಡುವಿರಿ. ನಾನು ಜೀವಿಸುವುದರಿಂದ ನೀವೂ ಜೀವಿಸುವಿರಿ. 20ನಾನು ನನ್ನ ತಂದೆಯಲ್ಲಿರುವುದನ್ನು ನೀವು ಆ ದಿನದಂದು ತಿಳಿದುಕೊಳ್ಳುವಿರಿ. ನೀವು ನನ್ನಲ್ಲಿರುವುದನ್ನೂ ನಾನು ನಿಮ್ಮಲ್ಲಿರುವುದನ್ನೂ ತಿಳಿದುಕೊಳ್ಳುವಿರಿ. 21ಒಬ್ಬನು ನನ್ನ ಆಜ್ಞೆಗಳನ್ನು ಸ್ವೀಕರಿಸಿಕೊಂಡು ಅವುಗಳಿಗೆ ವಿಧೇಯನಾದರೆ ಅವನು ನನ್ನನ್ನು ನಿಜವಾಗಿಯೂ ಪ್ರೀತಿಸುವವನಾಗಿದ್ದಾನೆ. ಅಲ್ಲದೆ ನನ್ನನ್ನು ಪ್ರೀತಿಸುವವನನ್ನು ನನ್ನ ತಂದೆಯೂ ಪ್ರೀತಿಸುವನು. ಮತ್ತು ನಾನೂ ಅವನನ್ನು ಪ್ರೀತಿಸುವೆನು. ನಾನು ಅವನಿಗೆ ನನ್ನನ್ನೇ ತೋರ್ಪಡಿಸಿಕೊಳ್ಳುವೆನು’’ ಎಂದು ಉತ್ತರಕೊಟ್ಟನು.

22ಆಗ ಯೂದನು (ಇಸ್ಕರಿಯೋತ ಯೂದನಲ್ಲ),
‘‘ಪ್ರಭುವೇ, ನೀನು ನಿನ್ನನ್ನು ಈ ಲೋಕಕ್ಕೆ ತೋರ್ಪಡಿಸಿ
ಕೊಳ್ಳದೆ ನಮಗೆ ಮಾತ್ರ ತೋರ್ಪಡಿಸಿಕೊಳ್ಳಬೇಕೆಂದಿರು
ವುದೇಕೆ?’’ ಎಂದು ಕೇಳಿದನು.
23ಯೇಸು ಹೀಗೆ ಉತ್ತರ ಕೊಟ್ಟನು: ‘‘ನನ್ನನ್ನು ಪ್ರೀತಿಸು
ವವನು ನನ್ನ ಉಪದೇಶಕ್ಕೆ ವಿಧೇಯನಾಗುವನು. ನನ್ನ
ತಂದೆಯು ಅವನನ್ನು ಪ್ರೀತಿಸುವನು. ನನ್ನ ತಂದೆ ಮತ್ತು ನಾನು
ಅವನ ಬಳಿಗೆ ಬಂದು ಅವನೊಂದಿಗೆ ವಾಸಿಸುವೆವು. 24ಆದರೆ
ನನ್ನನ್ನು ಪ್ರೀತಿಸದವನು, ನನ್ನ ಉಪದೇಶಕ್ಕೆ ವಿಧೇಯನಾಗು
ವುದಿಲ್ಲ. ನೀವು ಕೇಳುತ್ತಿರುವ ಈ ಉಪದೇಶವು ನಿಜವಾಗಿಯೂ
ನನ್ನದಲ್ಲ, ನನ್ನನ್ನು ಕಳುಹಿಸಿರುವ ನನ್ನ ತಂದೆಯದು. 25ನಾನು
ನಿಮ್ಮೊಂದಿಗೆ ಇರುವಾಗಲೇ ಈ ಸಂಗತಿಗಳನ್ನೆಲ್ಲಾ ನಿಮಗೆ ಹೇಳಿ
ದ್ದೇನೆ.
26‘‘ಆದರೆ ಆ ಸಹಾಯಕನು ನಿಮಗೆ ಪ್ರತಿಯೊಂದನ್ನೂ
ಉಪದೇಶಿಸುವನು. ನಾನು ನಿಮಗೆ ಹೇಳಿದ ಸಂಗತಿಗಳನ್ನೆಲ್ಲಾ
ಆ ಸಹಾಯಕನು ನಿಮ್ಮ ನೆನಪಿಗೆ ತರುವನು. ತಂದೆಯು ನನ್ನ
ಹೆಸರಿನಲ್ಲಿ ಕಳುಹಿಸಿಕೊಡುವ ಪವಿತ್ರಾತ್ಮನೇ ಆ ಸಹಾಯಕನು.
27‘‘ನಾನು ನಿಮಗೆ ಶಾಂತಿಯನ್ನು ಬಿಟ್ಟುಹೋಗುತ್ತೇನೆ.
ನಾನು ನಿಮಗೆ ನನ್ನ ಸ್ವಂತ ಶಾಂತಿಯನ್ನು ನೀಡುತ್ತೇನೆ. ಈ
ಲೋಕವು ಕೊಡುವದಕ್ಕಿಂತ ಭಿನ್ನವಾದ ರೀತಿಯಲ್ಲಿ ನಾನು
ನಿಮಗೆ ಶಾಂತಿಯನ್ನು ಕೊಡುತ್ತೇನೆ. ಆದ್ದರಿಂದ ನಿಮ್ಮ
ಹೃದಯವು ಕಳವಳಗೊಳ್ಳದಿರಲಿ. ಭಯಪಡಬೇಡಿರಿ. 28‘ನಾನು
ಹೊರಟು ಹೋಗುತ್ತೇನೆ, ಆದರೆ ನಿಮ್ಮ ಬಳಿಗೆ ಹಿಂತಿರುಗಿ
ಬರುತ್ತೇನೆ’ ಎಂದು ನಾನು ನಿಮಗೆ ಹೇಳಿದ್ದನ್ನು ನೀವು
ಕೇಳಿದ್ದೀರಿ. ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ, ನಾನು
ತಂದೆಯ ಬಳಿಗೆ ಮರಳಿಹೋಗುವುದರ ಬಗ್ಗೆ
ಸಂತೋಷಪಡುತ್ತಿದ್ದಿರಿ. ಏಕೆಂದರೆ ತಂದೆಯು ನನಗಿಂತಲೂ
ದೊಡ್ಡವನು. 29ಇದು ಸಂಭವಿಸುವುದಕ್ಕಿಂತ ಮೊದಲೇ ನಾನು
ನಿಮಗೆ ಇದನ್ನು ಈಗಲೇ ತಿಳಿಸಿದ್ದೇನೆ. ಹೀಗಿರಲು, ಇದು
ಸಂಭವಿಸುವಾಗ ನೀವು ನಂಬುವಿರಿ. 30ನಾನು ನಿಮ್ಮೊಂದಿಗೆ
ಇನ್ನು ಬಹಳ ಹೊತ್ತು ಮಾತಾಡುವುದಿಲ್ಲ. ಈ ಲೋಕದ
ಅಧಿಪತಿಯು (ಸೈತಾನನು) ಬರುತ್ತಿದ್ದಾನೆ. ಅವನಿಗೆ ನನ್ನ ಮೇಲೆ
ಯಾವ ಅಧಿಕಾರವೂ ಇಲ್ಲ. 31ಆದರೆ ನಾನು ತಂದೆಯನ್ನು
ಪ್ರೀತಿಸುತ್ತೇನೆ ಎಂಬುದನ್ನು ಈ ಲೋಕವು ತಿಳಿದುಕೊಳ್ಳಬೇಕು.
ಆದ್ದರಿಂದ ತಂದೆಯು ನನಗೆ ಹೇಳಿರುವುದನ್ನೇ ನಾನು
ಮಾಡುತ್ತೇನೆ. ಬನ್ನಿ, ನಾವು ಇಲ್ಲಿಂದ ಹೋಗೋಣ.’’

## ಯೇಸು ದ್ರಾಕ್ಷಿಬಳ್ಳಿಯಂತಿದ್ದಾನೆ

15 ‘‘ನಾನು ನಿಜವಾದ ದ್ರಾಕ್ಷಿಬಳ್ಳಿ. ನನ್ನ ತಂದೆ
ತೋಟಗಾರನು. 2ಫಲಕೊಡದಿರುವ ಪ್ರತಿಯೊಂದು
ಕವಲನ್ನು ಆತನು ಕತ್ತರಿಸಿ ಹಾಕುವನು. ಫಲಕೊಡುವ ಕವಲು
ಇನ್ನೂ ಹೆಚ್ಚು ಫಲಕೊಡುವಂತೆ ಅದನ್ನು ಶುದ್ಧಗೊಳಿಸುವನು.
3ನಾನು ನಿಮಗೆ ಹೇಳಿದ ಉಪದೇಶದಿಂದ ನೀವು ಈಗಾಗಲೇ
ಶುದ್ಧರಾಗಿದ್ದೀರಿ.
4‘‘ನೀವು ನನ್ನಲ್ಲಿ ನೆಲೆಗೊಂಡಿರಿ, ಆಗ ನಾನೂ ನಿಮ್ಮಲ್ಲಿ
ನೆಲೆಗೊಂಡಿರುವೆನು. ಯಾವ ಕವಲೂ ತನ್ನಷ್ಟಕ್ಕೆ ತಾನೇ
ಫಲಕೊಡಲಾರದು. ಅದು ದ್ರಾಕ್ಷಿಬಳ್ಳಿಯಲ್ಲಿ ನೆಲೆಗೊಂಡಿರ
ಬೇಕು. ಇದು ನಿಮಗೂ ಅನ್ವಯಿಸುತ್ತದೆ. ನೀವು ನಿಮ್ಮಷ್ಟಕ್ಕೇ
ಫಲಕೊಡಲಾರಿರಿ. ನೀವು ನನ್ನಲ್ಲಿ ನೆಲೆಗೊಂಡಿರಬೇಕು.
5‘‘ನಾನೇ ದ್ರಾಕ್ಷಿಬಳ್ಳಿ; ನೀವೇ ಕವಲುಗಳು. ಒಬ್ಬನು ನನ್ನಲ್ಲಿ
ನೆಲೆಗೊಂಡಿದ್ದರೆ ಮತ್ತು ನಾನು ಅವನಲ್ಲಿ ನೆಲೆಗೊಂಡಿದ್ದರೆ, ಆಗ
ಅವನು ಹೆಚ್ಚು ಫಲಕೊಡುವನು. ಆದರೆ ಅವನು ನನ್ನನ್ನು ಬಿಟ್ಟು
ಏನೂ ಮಾಡಲಾರನು. 6ನನ್ನಲ್ಲಿ ನೆಲೆಗೊಂಡಿಲ್ಲದವನು
ಹೊರಗೆ ಬಿಸಾಡಲ್ಪಟ್ಟ ಕವಲಿನಂತಿರುವನು. ಆ ಕವಲು ಸತ್ತು
ಹೋಗುವುದು. ಸತ್ತ ಕವಲುಗಳನ್ನು ಜನರು ಒಟ್ಟುಗೂಡಿಸಿ
ಬೆಂಕಿಯೊಳಕ್ಕೆ ಎಸೆದು ಸುಟ್ಟುಹಾಕುವರು.
7‘‘ನೀವು ನನ್ನಲ್ಲಿಯೂ ನನ್ನ ವಾಕ್ಯಗಳು ನಿಮ್ಮಲ್ಲಿಯೂ
ನೆಲೆಗೊಂಡಿದ್ದರೆ ಏನು ಬೇಕಾದರೂ ಕೇಳಿಕೊಳ್ಳಿರಿ, ಅದು
ನಿಮಗೆ ದೊರೆಯುವುದು. 8ನೀವು ಬಹಳ ಫಲಕೊಟ್ಟು, ನೀವೇ
ನನ್ನ ಶಿಷ್ಯರೆಂಬುದನ್ನು ತೋರಿಸಬೇಕು. ಇದರಿಂದ ನನ್ನ ತಂದೆಗೆ
ಮಹಿಮೆ ಆಗುವುದು. 9ತಂದೆಯು ನನ್ನನ್ನು ಪ್ರೀತಿಸಿದಂತೆ
ನಾನೂ ನಿಮ್ಮನ್ನು ಪ್ರೀತಿಸಿದೆನು. ಈಗ ನನ್ನ ಪ್ರೀತಿಯಲ್ಲಿ ನೆಲೆ
ಗೊಂಡಿರಿ. 10ನಾನು ನನ್ನ ತಂದೆಯ ಆಜ್ಞೆಗಳಿಗೆ ವಿಧೇಯ
ನಾಗಿದ್ದು ಆತನ ಪ್ರೀತಿಯಲ್ಲಿ ನೆಲೆಗೊಂಡಿದ್ದೇನೆ. ಅದೇ
ರೀತಿಯಲ್ಲಿ, ನೀವು ನನ್ನ ಆಜ್ಞೆಗಳಿಗೆ ವಿಧೇಯರಾದರೆ, ನೀವು
ನನ್ನ ಪ್ರೀತಿಯಲ್ಲಿ ನೆಲೆಗೊಂಡಿರುವಿರಿ. 11ನನಗಿರುವ ಆನಂದ
ವನ್ನು ನೀವೂ ಹೊಂದಿಕೊಳ್ಳಬೇಕೆಂದು ನಾನು ನಿಮಗೆ ಈ
ಸಂಗತಿಗಳನ್ನು ಹೇಳಿದ್ದೇನೆ. ನಿಮ್ಮ ಆನಂದವು ಪರಿಪೂರ್ಣವಾದ
ಆನಂದವಾಗಿರಬೇಕೆಂದು ನಾನು ಬಯಸುತ್ತೇನೆ. 12ನಾನು
ನಿಮ್ಮನ್ನು ಪ್ರೀತಿಸಿದಂತೆ ನೀವೂ ಒಬ್ಬರನ್ನೊಬ್ಬರು ಪ್ರೀತಿಸ
ಬೇಕೆಂಬುದೇ ನಾನು ನಿಮಗೆ ಕೊಡುವ ಆಜ್ಞೆಯಾಗಿದೆ.
13ಗೆಳೆಯರಿಗಾಗಿ ಸ್ವಂತ ಪ್ರಾಣವನ್ನೇ ಕೊಡುವ ಪ್ರೀತಿಗಿಂತ
ಮಿಗಿಲಾದ ಪ್ರೀತಿ ಯಾರಲ್ಲೂ ಇಲ್ಲ. 14ನಾನು ಹೇಳುವ
ಕಾರ್ಯಗಳನ್ನು ನೀವು ಮಾಡಿದರೆ, ನೀವು ನನ್ನ ಸ್ನೇಹಿತರು.
15ಈಗ ನಾನು ನಿಮ್ಮನ್ನು ನನ್ನ ಸೇವಕರುಗಳೆಂದು
ಕರೆಯುವುದಿಲ್ಲ. ಯಜಮಾನನ ಕೆಲಸಕಾರ್ಯಗಳು ಸೇವಕನಿಗೆ
ತಿಳಿದಿರುವುದಿಲ್ಲ. ಆದರೆ ಈಗ ನಾನು ನಿಮ್ಮನ್ನು ನನ್ನ ಗೆಳೆಯ
ರೆಂದು ಕರೆಯುತ್ತೇನೆ, ಏಕೆಂದರೆ ನನ್ನ ತಂದೆಯಿಂದ ಕೇಳಿದ
ಪ್ರತಿಯೊಂದನ್ನೂ ನಾನು ನಿಮಗೆ ಹೇಳಿದ್ದೇನೆ. 16ನೀವು ನನ್ನನ್ನು
ಆರಿಸಿಕೊಳ್ಳಲಿಲ್ಲ; ನಾನು ನಿಮ್ಮನ್ನು ಆರಿಸಿಕೊಂಡೆನು. ನೀವು
ಹೊರಟುಹೋಗಿ ಫಲಕೊಡಬೇಕು. ಇದೇ ನಾನು ನಿಮಗೆ
ಕೊಟ್ಟಿರುವ ಕೆಲಸ. ಈ ಫಲವು ನಿಮ್ಮ ಜೀವನದಲ್ಲಿ ಶಾಶ್ವತ
ವಾಗಿರಲಿ ಎಂಬುದೇ ನನ್ನ ಬಯಕೆ. ಹೀಗಿರಲಾಗಿ, ನೀವು ನನ್ನ
ಹೆಸರಿನಲ್ಲಿ ಏನು ಕೇಳಿಕೊಂಡರೂ ತಂದೆಯು ಅದನ್ನು ನಿಮಗೆ
ಕೊಡುವನು. 17ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬುದೇ
ನನ್ನ ಆಜ್ಞೆ.

## ಯೇಸು ತನ್ನ ಶಿಷ್ಯರಿಗೆ ನೀಡಿದ ಎಚ್ಚರಿಕೆ

18‘‘ಈ ಲೋಕವು ನಿಮ್ಮನ್ನು ದ್ವೇಷ ಮಾಡಿದರೆ, ಅದು
ಮೊದಲು ನನ್ನನ್ನೇ ದ್ವೇಷ ಮಾಡಿದ್ದನ್ನು ನೆನಪಿಗೆ ತಂದುಕೊಳ್ಳಿರಿ.
19ನೀವು ಈ ಲೋಕಕ್ಕೆ ಸೇರಿದವರಾಗಿದ್ದರೆ, ಈ ಲೋಕವು ತನ್ನ
ಸ್ವಂತ ಜನರನ್ನು ಪ್ರೀತಿಸುವಂತೆ ನಿಮ್ಮನ್ನೂ ಪ್ರೀತಿಸುತ್ತಿತ್ತು. ಆದರೆ
ನಾನು ನಿಮ್ಮನ್ನು ಈ ಲೋಕದೊಳಗಿಂದ ಆರಿಸಿಕೊಂಡಿದ್ದೇನೆ.
ಆದ್ದರಿಂದ ನೀವು ಈ ಲೋಕಕ್ಕೆ ಸೇರಿದವರಲ್ಲ. ಆದಕಾರಣ

ಈ ಲೋಕವು ನಿಮ್ಮನ್ನು ದ್ವೇಷಿಸುತ್ತದೆ. 20ಸೇವಕನು ತನ್ನ ಒಡೆಯನಿಗಿಂತ ದೊಡ್ಡವನಲ್ಲ ಎಂದು ನಾನು ನಿಮಗೆ ಹೇಳಿದ ಮಾತನ್ನು ಜ್ಞಾಪಿಸಿಕೊಳ್ಳಿ. ಜನರು ನನ್ನನ್ನು ಹಿಂಸಿಸಿದಂತೆ ನಿಮ್ಮನ್ನೂ ಹಿಂಸಿಸುವರು ಮತ್ತು ನನ್ನ ಉಪದೇಶಕ್ಕೆ ವಿಧೇಯರಾದರೆ ನಿಮ್ಮ ಉಪದೇಶಕ್ಕೂ ವಿಧೇಯರಾಗುವರು. 21ಜನರು ನನ್ನ ದೆಸೆಯಿಂದ ಇದನ್ನೆಲ್ಲಾ ನಿಮಗೆ ಮಾಡುವರು. ನನ್ನನ್ನು ಕಳುಹಿಸಿದಾತನನ್ನು ಅವರು ತಿಳಿದಿಲ್ಲ. 22ನಾನು ಬಂದು ಈ ಲೋಕದ ಜನರೊಂದಿಗೆ ಮಾತಾಡಿಲ್ಲದಿದ್ದರೆ, ಅವರನ್ನು ಪಾಪದೋಷಿಗಳೆಂದು ಹೇಳಲಾಗುತ್ತಿರಲಿಲ್ಲ. ಆದರೆ ಈಗ ನಾನು ಅವರೊಂದಿಗೆ ಮಾತಾಡಿದ್ದೇನೆ. ಆದ್ದರಿಂದ ತಮ್ಮ ಪಾಪಕ್ಕೆ ಅವರಿಗೆ ಯಾವ ನೆವವೂ ಇಲ್ಲ. 23ನನ್ನನ್ನು ದ್ವೇಷಿಸುವವನು ನನ್ನ ತಂದೆಯನ್ನೂ ದ್ವೇಷಿಸುವವನಾಗಿದ್ದಾನೆ. 24ಬೇರೆ ಯಾವ ವ್ಯಕ್ತಿಯೂ ಹಿಂದೆಂದೂ ಮಾಡಿಲ್ಲದ ಕಾರ್ಯಗಳನ್ನು ನಾನು ಆ ಜನರ ಮಧ್ಯದಲ್ಲಿ ಮಾಡಿದೆನು. ನಾನು ಆ ಕಾರ್ಯಗಳನ್ನು ಮಾಡಿಲ್ಲದಿದ್ದರೆ, ಅವರನ್ನು ಪಾಪದೋಷಿಗಳೆಂದು ಹೇಳಲಾಗುತ್ತಿರಲಿಲ್ಲ. ಆದರೆ ನಾನು ಮಾಡಿದ ಆ ಕಾರ್ಯಗಳನ್ನು ಅವರು ನೋಡಿದ್ದಾರೆ. ಹೀಗಿದ್ದರೂ ಅವರು ನನ್ನನ್ನೂ ನನ್ನ ತಂದೆಯನ್ನೂ ದ್ವೇಷಿಸುತ್ತಾರೆ. 25'ಅವರು ನನ್ನನ್ನು ನಿಷ್ಕಾರಣವಾಗಿ ದ್ವೇಷಿಸಿದರು' * ಎಂದು ಅವರ ಧರ್ಮಶಾಸ್ತ್ರದಲ್ಲಿ ಬರೆದಿರುವ ಮಾತು ನಿಜವಾಗಲೆಂದು ಹೀಗಾಯಿತು.

26‘‘ನಾನು ತಂದೆಯ ಬಳಿಯಿಂದ ಸಹಾಯಕನನ್ನು ನಿಮಗೆ ಕಳುಹಿಸಿಕೊಡುವೆನು. ತಂದೆಯ ಬಳಿಯಿಂದ ಬರುವ ಆ ಸಹಾಯಕನು ಸತ್ಯದ ಆತ್ಮನಾಗಿದ್ದಾನೆ. ಆತನು ಬಂದಾಗ ನನ್ನ ಬಗ್ಗೆ ನಿಮಗೆ ತಿಳಿಸುವನು. 27ಮತ್ತು ನೀವು ಮೊದಲಿಂದಲೂ ನನ್ನೊಂದಿಗೆ ಇದ್ದಕಾರಣ ನೀವು ಸಹ ನನ್ನ ಬಗ್ಗೆ ಜನರಿಗೆ ಹೇಳುವಿರಿ.

16 ‘‘ಜನರು ನಿಮ್ಮ ನಂಬಿಕೆಯನ್ನು ನಾಶಮಾಡಲಾಗದಂತೆ ನಾನು ಈ ಸಂಗತಿಗಳನ್ನೆಲ್ಲಾ ನಿಮಗೆ ಹೇಳಿದ್ದೇನೆ. 2ಜನರು ನಿಮ್ಮನ್ನು ತಮ್ಮ ಸಭಾಮಂದಿರಗಳಿಂದ ಬಹಿಷ್ಕರಿಸುವರು. ಹೌದು, ನಿಮ್ಮನ್ನು ಕೊಂದರೆ ದೇವರ ಸೇವೆ ಮಾಡಿದಂತಾಗುವುದು ಎಂದು ಜನರು ಯೋಚಿಸುವ ಕಾಲ ಬರಲಿದೆ. 3ಜನರು ತಂದೆಯನ್ನು ಮತ್ತು ನನ್ನನ್ನು ತಿಳಿದಿಲ್ಲದ ಕಾರಣ ಇವುಗಳನ್ನು ಮಾಡುವರು. 4ಈಗ ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದೇನೆ. ಹೀಗಿರಲು, ಈ ಸಂಗತಿಗಳೆಲ್ಲಾ ನೆರವೇರುವ ಕಾಲ ಬಂದಾಗ ನನ್ನ ಎಚ್ಚರಿಕೆಯ ಮಾತುಗಳನ್ನು ನೀವು ಜ್ಞಾಪಿಸಿಕೊಳ್ಳುವಿರಿ.

## ಪವಿತ್ರಾತ್ಮನ ಕಾರ್ಯ

‘‘ನಾನು ಈ ಸಂಗತಿಗಳನ್ನೆಲ್ಲಾ ನಿಮಗೆ ಆರಂಭದಲ್ಲೇ ತಿಳಿಸಲಿಲ್ಲ. ಏಕೆಂದರೆ, ಆಗ ನಾನು ನಿಮ್ಮ ಸಂಗಡವಿದ್ದೆನು. 5ಈಗಲಾದರೊ, ನನ್ನನ್ನು ಕಳುಹಿಸಿದಾತನ ಬಳಿಗೆ ನಾನು ಹೋಗುತ್ತಿದ್ದೇನೆ. ಆದರೆ ನಿಮ್ಮಲ್ಲಿ ಒಬ್ಬರಾದರೂ, ‘ನೀನು ಎಲ್ಲಿಗೆ ಹೋಗುತ್ತಿರುವೆ?’ ಎಂದು ನನ್ನನ್ನು ಕೇಳಲಿಲ್ಲ. 6ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದರಿಂದ ನಿಮ್ಮ ಹೃದಯಗಳು ದುಃಖದಿಂದ ತುಂಬಿಹೋಗಿವೆ. 7ಆದರೆ ನಾನು ನಿಮಗೆ ಸತ್ಯವನ್ನೇ ಹೇಳುತ್ತೇನೆ. ನಾನು ಹೋಗುವುದು ನಿಮ್ಮ ಒಳ್ಳೆಯದಕ್ಕಾಗಿಯೇ. ಏಕೆಂದರೆ ನಾನು ಹೋಗಿ ಸಹಾಯಕನನ್ನು ನಿಮ್ಮ ಬಳಿಗೆ ಕಳುಹಿಸುವೆನು. ನಾನು ಹೋಗದಿದ್ದರೆ, ಸಹಾಯಕನು ನಿಮ್ಮ ಬಳಿಗೆ ಬರುವುದಿಲ್ಲ. 8ಸಹಾಯಕನು ಬಂದು ಪಾಪ, ನೀತಿ, ನ್ಯಾಯತೀರ್ಪು ಈ ವಿಷಯಗಳ ಬಗ್ಗೆ ಲೋಕಕ್ಕೆ ತಿಳಿಸಿಕೊಡುವನು. 9ನನ್ನನ್ನು ನಂಬದಿರುವುದರಿಂದ ಜನರಲ್ಲಿ ಪಾಪವಿದೆಯೆಂದು ಆ ಸಹಾಯಕನು ನಿರೂಪಿಸುವನು. 10ನಾನು ತಂದೆಯ ಬಳಿಗೆ ಹೋಗುವುದರಿಂದ ನೀತಿಯ ವಿಷಯವಾಗಿಯೂ ಆತನು ಜನರಿಗೆ ನಿರೂಪಿಸುವನು. ಇನ್ನು ಮೇಲೆ ನೀವು ನನ್ನನ್ನು ನೋಡುವುದಿಲ್ಲ. 11ನ್ಯಾಯತೀರ್ಪಿನ ಕುರಿತಾದ ಸತ್ಯವನ್ನು ಆ ಸಹಾಯಕನು ಈ ಲೋಕಕ್ಕೆ ಸಾಧರಪಡಿಸುವನು, ಏಕೆಂದರೆ ಈ ಲೋಕದ ಅಧಿಪತಿಗೆ ಈಗಾಗಲೇ ನ್ಯಾಯತೀರ್ಪಾಗಿದೆ.

12‘‘ನಾನು ನಿಮಗೆ ತಿಳಿಸಬೇಕಾದ ಇನ್ನೂ ಅನೇಕ ಸಂಗತಿಗಳಿವೆ. ಆದರೆ ಈಗ ಆ ಸಂಗತಿಗಳನ್ನು ಸ್ವೀಕರಿಸಿಕೊಳ್ಳಲು ನಿಮಗೆ ಬಹು ಕಷ್ಟವಾಗಬಹುದು. 13ಆದರೆ ಸತ್ಯದ ಆತ್ಮನು ಬಂದಾಗ, ಆತನು ನಿಮ್ಮನ್ನು ಸಕಲ ವಿಷಯದಲ್ಲಿಯೂ ಸತ್ಯಕ್ಕೆ ನಡೆಸುವನು. ಸತ್ಯದ ಆತ್ಮನು ಹೇಳುವುದು ಆತನ ಸ್ವಂತ ಮಾತುಗಳಲ್ಲ. ತಾನು ಕೇಳಿದ್ದನ್ನು ಮಾತ್ರ ಆತನು ಹೇಳುತ್ತಾನೆ. ಸಂಭವಿಸಲಿರುವ ಸಂಗತಿಗಳನ್ನು ಆತನು ನಿಮಗೆ ತಿಳಿಸುತ್ತಾನೆ. 14ಸತ್ಯದ ಆತ್ಮನು ನನ್ನಿಂದಲೇ ವಿಷಯಗಳನ್ನು ತೆಗೆದುಕೊಂಡು ನಿಮಗೆ ತಿಳಿಸುವುದರ ಮೂಲಕ ನನ್ನನ್ನು ಮಹಿಮೆಪಡಿಸುವನು. 15ನನ್ನ ತಂದೆಗೆ ಇರುವುದೆಲ್ಲಾ ನನ್ನವೇ. ಆದಕಾರಣ, ಪವಿತ್ರಾತ್ಮನು ನನ್ನಿಂದಲೇ ವಿಷಯಗಳನ್ನು ತೆಗೆದುಕೊಂಡು, ನಿಮಗೆ ತಿಳಿಸುತ್ತಾನೆ ಎಂದು ನಿಮಗೆ ಹೇಳಿದೆನು.

## ದುಃಖವು ಸಂತೋಷವಾಗುವುದು

16‘‘ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಅನಂತರ ಸ್ವಲ್ಪಕಾಲವಾದ ಮೇಲೆ ನೀವು ನನ್ನನ್ನು ಮತ್ತೆ ನೋಡುವಿರಿ.’’

17ಶಿಷ್ಯರಲ್ಲಿ ಕೆಲವರು, ‘‘‘ಸ್ವಲ್ಪಕಾಲದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಆದರೆ ಅನಂತರ ಸ್ವಲ್ಪಕಾಲವಾದ ಬಳಿಕ ನನ್ನನ್ನು ಮತ್ತೆ ನೋಡುವಿರಿ. ಏಕೆಂದರೆ ನಾನು ತಂದೆಯ ಬಳಿಗೆ ಹೋಗುತ್ತಿದ್ದೇನೆ’ ಎಂದು ಆತನು ಹೇಳಿದ್ದರ ಅರ್ಥವೇನು?’’ ಎಂದು ಒಬ್ಬರಿಗೊಬ್ಬರು ಮಾತಾಡಿಕೊಂಡರು. 18ಶಿಷ್ಯರು, ‘‘‘ಸ್ವಲ್ಪಕಾಲ’ ಎಂದರೇನು? ಆತನ ಮಾತೇ ನಮಗೆ ಅರ್ಥವಾಗುತ್ತಿಲ್ಲ’’ ಎಂದು ಒಬ್ಬರನ್ನೊಬ್ಬರು ಕೇಳತೊಡಗಿದರು.

19ಶಿಷ್ಯರು ಇದರ ಬಗ್ಗೆ ತನ್ನನ್ನು ಕೇಳಬೇಕೆಂದಿದ್ದಾರೆ ಎಂಬುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಆತನು, ‘ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಆದರೆ ಅನಂತರ ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ನೋಡುವಿರಿ’ ಎಂದು ನಾನು ಹೇಳಿದ್ದರ ಅರ್ಥವೇನೆಂದು ನೀವು ಒಬ್ಬರನ್ನೊಬ್ಬರು ಕೇಳುತ್ತಿದ್ದೀರಾ? 20ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ಅಳುವಿರಿ, ದುಃಖಪಡುವಿರಿ. ಆದರೆ ಲೋಕವು ಸಂತೋಷಪಡುವುದು. ನೀವು ದುಃಖಪಡುವಿರಿ ಆದರೆ ನಿಮ್ಮ ದುಃಖವು ಆನಂದವಾಗುವುದು. 21ಗರ್ಭಿಣಿ ಸ್ತ್ರೀಯು ಪ್ರಸವಿಸುವ ಗಳಿಗೆ ಬಂದಾಗ ವೇದನೆಪಡುತ್ತಾಳೆ. ಮಗುವು ಜನಿಸಿದಾಗ, ಲೋಕದಲ್ಲಿ ಮಗುವೊಂದು ಜನಿಸಿತೆಂಬ

---

**ಅವರು … ದ್ವೇಷಿಸಿದರು** ಕೀರ್ತನೆ 35:19; 69:4

ಸಂತೋಷದಿಂದ ಆ ವೇದನೆಯನ್ನು ಮರೆತುಬಿಡುತ್ತಾಳೆ.
22ಇದು ನಿಮಗೂ ಅನ್ವಯಿಸುತ್ತದೆ. ಈಗ ನೀವು ದುಃಖ
ದಿಂದಿದ್ದೀರಿ. ಆದರೆ ನಾನು ನಿಮ್ಮನ್ನು ಮತ್ತೆ ನೋಡಿದಾಗ
ಹರ್ಷಿಸುವಿರಿ. ಆ ಹರ್ಷವನ್ನು ಯಾರೂ ನಿಮ್ಮಿಂದ ಕಸಿದು
ಕೊಳ್ಳಲಾರರು. 23ಆ ದಿನದಲ್ಲಿ ನೀವು ನನಗೆ ಯಾವ ಪ್ರಶ್ನೆ
ಯನ್ನೂ ಕೇಳುವುದಿಲ್ಲ. ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನೀವು ನನ್ನ ಹೆಸರಿನಲ್ಲಿ ಏನು ಕೇಳಿಕೊಂಡರೂ ತಂದೆಯು
ಅದನ್ನು ನಿಮಗೆ ಕೊಡುವನು. 24ನೀವು ನನ್ನ ಹೆಸರಿನಲ್ಲಿ ಏನೂ
ಕೇಳಿಕೊಳ್ಳಲಿಲ್ಲ. ಕೇಳಿರಿ, ಆಗ ನಿಮಗೆ ದೊರೆಯುವುದು. ಮತ್ತು
ನಿಮ್ಮ ಆನಂದವು ಪರಿಪೂರ್ಣವಾಗುವುದು.

## ಲೋಕದ ಮೇಲೆ ವಿಜಯ

25‘‘ನಾನು ನಿಮಗೆ ಈ ಸಂಗತಿಗಳನ್ನು ಸಾಮ್ಯಗಳ
ರೂಪದಲ್ಲಿ ತಿಳಿಸಿದೆನು. ಆದರೆ ಸಮಯವು ಬರಲಿದೆ. ಆಗ
ನಾನು ಸಾಮ್ಯಗಳನ್ನು ಬಳಸದೆ ನನ್ನ ತಂದೆಯ ಬಗ್ಗೆ ಸರಳವಾದ
ಮಾತುಗಳಲ್ಲಿ ತಿಳಿಸುವೆನು. 26ಆಗ ನೀವು ನನ್ನ ಹೆಸರಿನಲ್ಲಿ ತಂದೆ
ಯನ್ನು ಬೇಡಿಕೊಳ್ಳುವಿರಿ. ನಾನು ನಿಮಗೋಸ್ಕರ ತಂದೆಯನ್ನು
ಕೇಳಿಕೊಳ್ಳುವ ಅಗತ್ಯವಿರುವುದಿಲ್ಲ. 27ಹೌದು, ತಂದೆಯು
ತಾನೇ ನಿಮ್ಮನ್ನು ಪ್ರೀತಿಸುತ್ತಾನೆ. ನೀವು ನನ್ನನ್ನು ಪ್ರೀತಿಸಿದ್ದರಿಂದ
ಮತ್ತು ನಾನು ದೇವರಿಂದ ಬಂದೆನೆಂದು ನೀವು ನಂಬುವುದ
ರಿಂದ ಆತನು ನಿಮ್ಮನ್ನು ಪ್ರೀತಿಸುತ್ತಾನೆ. 28ನಾನು ತಂದೆಯ
ಬಳಿಯಿಂದ ಈ ಲೋಕಕ್ಕೆ ಬಂದೆನು. ಈಗ ನಾನು ಈ ಲೋಕ
ವನ್ನು ಬಿಟ್ಟು ತಂದೆಯ ಬಳಿಗೆ ಹಿಂತಿರುಗಿ ಹೋಗುತ್ತಿದ್ದೇನೆ’’
ಎಂದು ಹೇಳಿದನು. 29 ಆಗ ಶಿಷ್ಯರು ಯೇಸುವಿಗೆ, ‘‘ಈಗ ನೀನು
ನಮ್ಮೊಂದಿಗೆ ಸ್ಪಷ್ಟವಾಗಿ ಮಾತಾಡುತ್ತಿರುವೆ. ಅರ್ಥವಾಗದಂಥ
ಕಠಿಣ ಮಾತುಗಳನ್ನು ನೀನು ಬಳಸುತ್ತಿಲ್ಲ. 30ನಿನಗೆ ಎಲ್ಲಾ
ಸಂಗತಿಗಳು ತಿಳಿದಿವೆಯೆಂದು ನಮಗೆ ಈಗ ತಿಳಿಯಿತು. ಒಬ್ಬನು
ಪ್ರಶ್ನೆಯನ್ನು ಕೇಳುವುದಕ್ಕಿಂತ ಮೊದಲೇ ನೀನು ಅವನ ಪ್ರಶ್ನೆಗೆ
ಉತ್ತರ ಕೊಡಬಲ್ಲೆ. ಇದರಿಂದಾಗಿ, ನೀನು ದೇವರಿಂದ
ಬಂದವನೆಂದು ನಾವು ನಂಬುತ್ತೇವೆ’’ ಎಂದು ಹೇಳಿದರು.
31ಯೇಸು, ‘‘ಹಾಗಾದರೆ ಈಗ ನೀವು ನಂಬುತ್ತೀರಾ?
32ನನಗೆ ಕಿವಿಗೊಡಿರಿ. ನೀವು ಚದರಿಹೋಗುವ ಕಾಲ
ಬರುತ್ತಿದೆ. ನಿಮ್ಮಲ್ಲಿ ಪ್ರತಿಯೊಬ್ಬನೂ ತನ್ನ ಸ್ವಂತ ಮನೆಗೆ
ಚದರಿಹೋಗುವನು. ಆ ಸಮಯ ಈಗಲೇ ಬಂದಿದೆ. ನೀವು
ನನ್ನನ್ನು ಬಿಟ್ಟು ಹೋಗುವಿರಿ. ನಾನು ಒಬ್ಬಂಟಿಗನಾಗಿರುವೆನು.
ಆದರೆ ನಿಜವಾಗಿ ನಾನೆಂದಿಗೂ ಒಬ್ಬಂಟಿಗನಲ್ಲ. ಏಕೆಂದರೆ
ತಂದೆಯು ನನ್ನೊಂದಿಗಿದ್ದಾನೆ.
33‘‘ನೀವು ನನ್ನಲ್ಲಿ ಶಾಂತಿಯನ್ನು ಹೊಂದಿದವರಾಗಿರ
ಬೇಕೆಂದು ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದೇನೆ.
ಈ ಲೋಕದಲ್ಲಿ ನಿಮಗೆ ಸಂಕಟವಿದೆ. ಆದರೆ ಧೈರ್ಯದಿಂದಿರಿ!
ನಾನು ಈ ಲೋಕವನ್ನು ಸೋಲಿಸಿದ್ದೇನೆ!’’ ಎಂದು ಹೇಳಿದನು.

## ಶಿಷ್ಯರಿಗೋಸ್ಕರ ಯೇಸುವಿನ ಪ್ರಾರ್ಥನೆ

17 ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ
ಪರಲೋಕದ ಕಡೆಗೆ ನೋಡಿ ಹೀಗೆ ಪ್ರಾರ್ಥಿಸಿದನು,
‘‘ತಂದೆಯೇ, ಸಮಯವು ಬಂದಿದೆ. ನಿನ್ನ ಮಗನನ್ನು
ಮಹಿಮೆಪಡಿಸು. ಆಗ ಮಗನು ನಿನ್ನನ್ನು ಮಹಿಮೆಪಡಿಸಬಲ್ಲನು.
2ನೀನು ಮಗನಿಗೆ ಯಾರ್ಯಾರನ್ನು ಕೊಟ್ಟಿಯೋ ಅವರೆಲ್ಲರಿಗೂ
ಮಗನು ನಿತ್ಯಜೀವವನ್ನು ಕೊಡಬೇಕೆಂದು ನೀನು ಮಗನಿಗೆ
ಅಧಿಕಾರವನ್ನು ಕೊಟ್ಟಿರುವೆ. 3ಒಬ್ಬನೇ ಸತ್ಯದೇವರಾಗಿರುವ
ನಿನ್ನನ್ನು ಮತ್ತು ನೀನು ಕಳುಹಿಸಿದ ಯೇಸು ಕ್ರಿಸ್ತನನ್ನು ತಿಳಿದು
ಕೊಳ್ಳುವುದೇ ನಿತ್ಯಜೀವ. 4ನೀನು ನನಗೆ ಕೊಟ್ಟ ಕೆಲಸವನ್ನು
ನಾನು ಮಾಡಿ ಪೂರೈಸಿದ್ದೇನೆ. ನಾನು ಭೂಲೋಕದಲ್ಲಿ ನಿನ್ನನ್ನು
ಮಹಿಮೆಪಡಿಸಿದೆನು. 5ಈಗ, ತಂದೆಯೇ, ನೀನು ನಿನ್ನ ಸನ್ನಿಧಿ
ಯಲ್ಲಿ ನನ್ನನ್ನು ಮಹಿಮೆಪಡಿಸು. ಈ ಲೋಕವು ಸೃಷ್ಟಿಯಾಗು
ವುದಕ್ಕಿಂತ ಮೊದಲು ನಾನು ನಿನ್ನೊಂದಿಗೆ ಹೊಂದಿದ್ದ ಮಹಿಮೆ
ಯನ್ನು ನನಗೆ ಕೊಡು.
6‘‘ನೀನು ಈ ಲೋಕದೊಳಗಿಂದ ಈ ಕೆಲವು ಜನರನ್ನು
ನನಗೆ ಕೊಟ್ಟೆ. ನಿನ್ನ ಸ್ವರೂಪವನ್ನು ನಾನು ಇವರಿಗೆ ತೋರಿ
ಸಿದೆನು. ಇವರು ನಿನ್ನವರಾಗಿದ್ದಾರೆ, ಮತ್ತು ನೀನೇ ಇವರನ್ನು
ನನಗೆ ಕೊಟ್ಟೆ. ಇವರು ನಿನ್ನ ಆಜ್ಞೆಗಳಿಗೆ ವಿಧೇಯರಾದರು.
7ನೀನು ನನಗೆ ಕೊಟ್ಟ ಪ್ರತಿಯೊಂದೂ ನಿನ್ನಿಂದಲೇ ಬಂದಿದೆ
ಎಂಬುದು ಇವರಿಗೆ ಈಗ ತಿಳಿದಿದೆ. 8ನೀನು ನನಗೆ ಕೊಟ್ಟ
ಮಾತುಗಳನ್ನು ನಾನು ಇವರಿಗೆ ಕೊಟ್ಟಿದ್ದೇನೆ. ಇವರು ಆ
ಮಾತುಗಳನ್ನು ಸ್ವೀಕರಿಸಿಕೊಂಡಿದ್ದಾರೆ. ನಾನು ನಿಜವಾಗಿಯೂ
ನಿನ್ನ ಬಳಿಯಿಂದ ಬಂದಿರುವುದಾಗಿಯೂ ನೀನೇ ನನ್ನನ್ನು
ಕಳುಹಿಸಿರುವುದಾಗಿಯೂ ಇವರು ನಂಬಿದ್ದಾರೆ. 9ಈಗ ನಾನು
ಇವರಿಗಾಗಿ ಪ್ರಾರ್ಥಿಸುವೆನು. ಈ ಲೋಕದಲ್ಲಿರುವ ಜನರಿ
ಗೋಸ್ಕರ ನಾನು ಪ್ರಾರ್ಥಿಸುತ್ತಿಲ್ಲ. ಆದರೆ ನೀನು ನನಗೆ ಕೊಟ್ಟ
ಇವರಿಗಾಗಿ ಪ್ರಾರ್ಥಿಸುತ್ತಿದ್ದೇನೆ, ಏಕೆಂದರೆ ಇವರು ನಿನ್ನವರಾಗಿ
ದ್ದಾರೆ.
10‘‘ನನ್ನಲ್ಲಿರುವುದೆಲ್ಲಾ ನಿನ್ನದೇ ಮತ್ತು ನಿನ್ನಲ್ಲಿರುವುದೆಲ್ಲಾ
ನನ್ನದೇ. ಇವರಿಂದ ನನಗೆ ಮಹಿಮೆ ಉಂಟಾಗಿದೆ. 11ಈಗ
ನಾನು ನಿನ್ನ ಬಳಿಗೆ ಬರುತ್ತಿದ್ದೇನೆ. ಇನ್ನು ನಾನು ಈ ಲೋಕದಲ್ಲಿ
ರುವುದಿಲ್ಲ. ಆದರೆ ಇವರು ಇನ್ನೂ ಈ ಲೋಕದಲ್ಲಿರುತ್ತಾರೆ.
ಪವಿತ್ರನಾದ ತಂದೆಯೇ, (ನೀನು ನನಗೆ ಕೊಟ್ಟ) ನಿನ್ನ ಹೆಸರಿನ
ಶಕ್ತಿಯಿಂದ ಇವರನ್ನು ಕಾಯ್ದು ಕಾಪಾಡು. ನೀನು ನಾನೂ
ಒಂದಾಗಿರುವಂತೆ ಇವರೂ ಒಂದಾಗಿರಲು ಆಗ ಸಾಧ್ಯ
ವಾಗುವುದು. 12ನಾನು ಇವರೊಂದಿಗೆ ಇದ್ದಾಗ, ನಿನ್ನ ಹೆಸರಿನ
ಶಕ್ತಿಯಿಂದ ಇವರನ್ನು ಕಾಯ್ದು ಕಾಪಾಡಿದೆನು. ಪವಿತ್ರ ಗ್ರಂಥದ
ಹೇಳಿಕೆಯು ನೆರವೇರುವಂತೆ ಕಳೆದುಹೋಗುವುದಕ್ಕಾಗಿಯೇ
ಆರಿಸಲ್ಪಟ್ಟಿದ್ದ (ಯೂದನೆಂಬ) ಒಬ್ಬನೇ ಒಬ್ಬನು ಇವರಲ್ಲಿ
ನಾಶವಾದನು.
13‘‘ಈಗ ನಾನು ನಿನ್ನ ಬಳಿಗೆ ಬರುತ್ತಿದ್ದೇನೆ. ಆದರೆ ನಾನು
ಈ ಲೋಕದಲ್ಲಿ ಇನ್ನೂ ಇರುವಾಗಲೇ ಈ ಸಂಗತಿಗಳಿಗಾಗಿ
ಪ್ರಾರ್ಥಿಸುತ್ತಿದ್ದೇನೆ. ಈ ಜನರು ನನ್ನ ಆನಂದವನ್ನು ಹೊಂದಿದವ
ರಾಗಿರಬೇಕೆಂದು ಮತ್ತು ನನ್ನ ಆನಂದವು ಇವರಲ್ಲಿ ಪರಿಪೂರ್ಣ
ವಾಗಿರಬೇಕೆಂದು ಈ ಸಂಗತಿಗಳನ್ನು ಹೇಳುತ್ತಿದ್ದೇನೆ. 14ನಾನು
ಇವರಿಗೆ ನಿನ್ನ ವಾಕ್ಯವನ್ನು ಕೊಟ್ಟಿದ್ದೇನೆ. ಈ ಲೋಕವು ಇವರನ್ನು
ದ್ವೇಷಿಸುತ್ತದೆ. ನಾನು ಈ ಲೋಕಕ್ಕೆ ಯಾವ ರೀತಿ ಸೇರಿದವ
ನಾಗಿಲ್ಲವೋ ಅದೇ ರೀತಿ ಇವರೂ ಈ ಲೋಕಕ್ಕೆ ಸೇರಿದವ
ರಾಗಿಲ್ಲ. ಆದ್ದರಿಂದ ಈ ಲೋಕವು ಇವರನ್ನು ದ್ವೇಷಿಸುತ್ತಿದೆ.
15ನೀನು ಇವರನ್ನು ಈ ಲೋಕದಿಂದ ತೆಗೆದುಕೊಳ್ಳಬೇಕೆಂದು
ನಾನು ಕೇಳುತ್ತಿಲ್ಲ. ಆದರೆ ಇವರನ್ನು ಕೆಡುಕನಿಂದ (ಸೈತಾನ

ನಿಂದ) ತಪ್ಪಿಸಿ ಸುರಕ್ಷಿತವಾಗಿರಿಸಬೇಕೆಂದು ನಾನು ಕೇಳಿಕೊಳ್ಳು
ತ್ತಿದ್ದೇನೆ.
16“ನಾನು ಈ ಲೋಕಕ್ಕೆ ಯಾವ ರೀತಿ ಸೇರಿದವ
ನಾಗಿಲ್ಲವೋ ಅದೇ ರೀತಿ ಇವರೂ ಈ ಲೋಕಕ್ಕೆ ಸೇರಿದವ
ರಾಗಿಲ್ಲ.
17“ನಿನ್ನ ಸತ್ಯದ ಮೂಲಕ ನೀನು ಇವರನ್ನು ನಿನ್ನ ಸೇವೆಗೆ
ಸಿದ್ಧಪಡಿಸು. ನಿನ್ನ ವಾಕ್ಯವು ಸತ್ಯವಾದದ್ದು. 18ನೀನು ನನ್ನನ್ನು
ಈ ಲೋಕಕ್ಕೆ ಕಳುಹಿಸಿದಂತೆ ನಾನೂ ಇವರನ್ನು ಈ ಲೋಕಕ್ಕೆ
ಕಳುಹಿಸಿದ್ದೇನೆ.
19“ಇವರು ನಿಜವಾಗಿ ನಿನ್ನ ಸೇವೆಗೆ ಪ್ರತಿಷ್ಠಿತರಾಗಬೇಕೆಂದು
ನಾನು ನನ್ನನ್ನೇ ಪ್ರತಿಷ್ಠಿಸಿಕೊಂಡಿದ್ದೇನೆ.
20“ನಾನು ಇವರಿಗಾಗಿಯೂ ಇವರ ವಾಕ್ಯದಿಂದ ನನ್ನಲ್ಲಿ
ನಂಬಿಕೆ ಇಡುವ ಎಲ್ಲರಿಗಾಗಿಯೂ ಪ್ರಾರ್ಥಿಸುತ್ತಿದ್ದೇನೆ.
21ತಂದೆಯೇ, ನನ್ನಲ್ಲಿ ನಂಬಿಕೆ ಇಡುವ ಎಲ್ಲಾ ಜನರು
ಒಂದಾಗಿರಬೇಕೆಂದು ನಾನು ಪ್ರಾರ್ಥಿಸುತ್ತೇನೆ. ನೀನು ನನ್ನಲ್ಲಿ
ನೆಲೆಸಿರುವೆ ಮತ್ತು ನಾನು ನಿನ್ನಲ್ಲಿ ನೆಲೆಸಿರುವೆ. ನೀನು ನನ್ನನ್ನು
ಕಳುಹಿಸಿರುವಿಯೆಂದು ಈ ಲೋಕವು ನಂಬಿಕೊಳ್ಳುವುದಕ್ಕಾಗಿ
ಈ ಜನರು ಸಹ ನಮ್ಮೊಂದಿಗೆ ಒಂದಾಗಿರಬೇಕೆಂದು ನಾನು
ಪ್ರಾರ್ಥಿಸುತ್ತೇನೆ. 22ನೀನು ನನಗೆ ಕೊಟ್ಟ ಮಹಿಮೆಯನ್ನು
ನಾನು ಈ ಜನರಿಗೆ ಕೊಟ್ಟಿದ್ದೇನೆ. ನೀನು ಮತ್ತು ನಾನು
ಒಂದಾಗಿರುವಂತೆ ಇವರೂ ಒಂದಾಗಿರಬೇಕೆಂದು ನಾನು
ಇವರಿಗೆ ಈ ಮಹಿಮೆಯನ್ನು ಕೊಟ್ಟೆನು. 23ನಾನು ಅವರಲ್ಲಿ
ಇರುವೆನು, ಮತ್ತು ನೀನು ನನ್ನಲ್ಲಿರುವೆ. ಆದ್ದರಿಂದ ಅವರು
ಸಂಪೂರ್ಣವಾಗಿ ಒಂದಾಗಿರುವರು. ನೀನೇ ನನ್ನನ್ನು
ಕಳುಹಿಸಿರುವುದಾಗಿ ಮತ್ತು ನೀನು ನನ್ನನ್ನು ಪ್ರೀತಿಸಿದಂತೆಯೇ
ಈ ಜನರನ್ನೂ ಪ್ರೀತಿಸಿರುವುದಾಗಿ ಈ ಲೋಕವು ಆಗ
ತಿಳಿದುಕೊಳ್ಳುವುದು.
24“ತಂದೆಯೇ, ನೀನು ನನಗೆ ಕೊಟ್ಟಿರುವ ಇವರು, ನಾನು
ಇರುವಲ್ಲೆಲ್ಲಾ ನನ್ನೊಂದಿಗೆ ಇರಬೇಕೆಂದು ಮತ್ತು ನನ್ನ
ಮಹಿಮೆಯನ್ನು ನೋಡಬೇಕೆಂದು ಅಪೇಕ್ಷಿಸುತ್ತೇನೆ. ಈ
ಲೋಕವು ಸೃಷ್ಟಿಯಾಗುವುದಕ್ಕಿಂತ ಮೊದಲೇ ನೀನು ನನ್ನನ್ನು
ಪ್ರೀತಿಸಿದ್ದರಿಂದ ನೀನೇ ನನಗೆ ಈ ಮಹಿಮೆಯನ್ನು ಕೊಟ್ಟೆ.
25ನೀತಿಯುಳ್ಳ ತಂದೆಯೇ, ಈ ಲೋಕವು ನಿನ್ನನ್ನು ತಿಳಿದಿಲ್ಲ.
ಆದರೆ ನಾನು ನಿನ್ನನ್ನು ತಿಳಿದಿರುವೆ, ಮತ್ತು ನೀನೇ ನನ್ನನ್ನು
ಕಳುಹಿಸಿರುವೆ ಎಂಬುದು ಈ ಜನರಿಗೆ ತಿಳಿದಿದೆ. 26ನಾನು ನಿನ್ನ
ನಿಜಸ್ವಭಾವವನ್ನು ಇವರಿಗೆ ಗೊತ್ತುಪಡಿಸಿದೆನು. ನಾನು ನಿನ್ನ
ಸ್ವರೂಪವನ್ನು ಇವರಿಗೆ ಮತ್ತೆ ತೋರಿಸುವೆನು. ಆಗ ನನ್ನ ಮೇಲೆ
ನಿನಗೆ ಯಾವ ಪ್ರೀತಿಯಿದೆಯೋ, ಅದೇ ಪ್ರೀತಿಯು ಇವರ
ಲ್ಲಿಯೂ ಇರುವುದು ಮತ್ತು ನಾನು ಇವರಲ್ಲಿ ಇರುವೆನು.”

### ಯೇಸುವಿನ ಬಂಧನ

(ಮತ್ತಾಯ 26:47-56; ಮಾರ್ಕ 14:43-50; ಲೂಕ 22:47-53)

18 ಯೇಸು ಪ್ರಾರ್ಥಿಸಿದ ಮೇಲೆ ತನ್ನ ಶಿಷ್ಯರೊಂದಿಗೆ
ಹೊರಟನು. ಅವರು ಕಿದ್ರೋನ್ ಕಣಿವೆಯನ್ನು
ದಾಟಿ ಹೋದರು. ಅದರ ಮತ್ತೊಂದು ಕಡೆಯಲ್ಲಿ ಆಲಿವ್
ಮರಗಳ ತೋಟವಿತ್ತು. ಯೇಸು ಮತ್ತು ಆತನ ಶಿಷ್ಯರು ಅಲ್ಲಿಗೆ
ಹೋದರು. 2ಯೇಸುವಿಗೆ ದ್ರೋಹ ಬಗೆದ ಯೂದನಿಗೂ ಈ
ಸ್ಥಳವು ತಿಳಿದಿತ್ತು. ಏಕೆಂದರೆ ಯೇಸು ತನ್ನ ಶಿಷ್ಯರೊಂದಿಗೆ ಆಗಾಗ್ಗೆ
ಅಲ್ಲಿಗೆ ಬರುತ್ತಿದ್ದನು. 3ಯೂದನು ಸೈನಿಕರ ಗುಂಪೊಂದನ್ನೂ
ಮಹಾಯಾಜಕರ ಮತ್ತು ಫರಿಸಾಯರ ಕಾವಲುಗಾರರಲ್ಲಿ
ಕೆಲವರನ್ನೂ ಕರೆದುಕೊಂಡು ತೋಟಕ್ಕೆ ಬಂದನು. ಅವರು
ದೀವಟಿಗೆ, ಪಂಜು ಮತ್ತು ಆಯುಧಗಳಿಂದ ಸುಸಜ್ಜಿತ
ರಾಗಿದ್ದರು. 4ತನಗೆ ಸಂಭವಿಸಲಿದ್ದ ಪ್ರತಿಯೊಂದೂ ಯೇಸುವಿಗೆ
ತಿಳಿದಿತ್ತು. ಆತನು ಹೊರಗೆ ಹೋಗಿ, “ನೀವು ಯಾರನ್ನು
ಹುಡುಕುತ್ತಿದ್ದೀರಿ?” ಎಂದು ಕೇಳಿದನು.
5ಅವರು, “ನಜರೇತಿನ ಯೇಸುವನ್ನು” ಎಂದು ಉತ್ತರ
ಕೊಟ್ಟರು. ಆತನು, “ನಾನೇ ಯೇಸು” ಎಂದನು. (ಯೇಸುವಿಗೆ
ದ್ರೋಹ ಬಗೆದ ಯೂದನು ಅವರೊಂದಿಗೆ ಅಲ್ಲೇ ನಿಂತಿದ್ದನು.)
6ಆತನು, “ನಾನೇ ಯೇಸು” ಎಂದಾಗ ಅವರು ಹಿಂದೆ ಸರಿದು
ನೆಲದ ಮೇಲೆ ಬಿದ್ದರು.
7ಯೇಸು ಅವರಿಗೆ ಮತ್ತೆ “ನೀವು ಯಾರನ್ನು ಹುಡುಕು
ತ್ತಿದ್ದೀರಿ” ಎಂದು ಕೇಳಿದನು.
ಅವರು, “ನಜರೇತಿನ ಯೇಸುವನ್ನು” ಎಂದು ಹೇಳಿದರು.
8ಆತನು, “ನಾನೇ ಯೇಸು ಎಂದು ನಿಮಗೆ ಹೇಳಿದೆನಲ್ಲಾ.
ನೀವು ನನ್ನನ್ನು ಹುಡುಕುತ್ತಿದ್ದರೆ, ಉಳಿದ ಇವರನ್ನು ಹೋಗ
ಬಿಡಿರಿ” ಎಂದು ಹೇಳಿದನು. 9“ನೀನು ನನಗೆ ಕೊಟ್ಟ ಜನರಲ್ಲಿ
ಯಾರನ್ನೂ ನಾನು ಕಳೆದುಕೊಳ್ಳಲಿಲ್ಲ” ಎಂದು ಯೇಸು
ಮೊದಲು ಹೇಳಿದ್ದ ಮಾತು ಹೀಗೆ ನಿಜವಾಯಿತು.
10ಸೀಮೋನ್ ಪೇತ್ರನ ಬಳಿ ಒಂದು ಖಡ್ಗವಿತ್ತು. ಅವನು
ಆ ಖಡ್ಗವನ್ನು ಹೊರತೆಗೆದು ಪ್ರಧಾನ ಯಾಜಕನ ಸೇವಕ
ನೊಬ್ಬನಿಗೆ ಹೊಡೆದು, ಅವನ ಬಲಗಿವಿಯನ್ನು ಕತ್ತರಿಸಿದನು.
(ಆ ಸೇವಕನ ಹೆಸರು ಮಾಲ್ಕ.)
11ಯೇಸು ಪೇತ್ರನಿಗೆ, “ನಿನ್ನ ಖಡ್ಗವನ್ನು ಒರೆಯಲ್ಲಿ ಹಾಕು!
ತಂದೆಯು ನನಗೆ ಕೊಟ್ಟಿರುವ ಸಂಕಟದ ಪಾತ್ರೆಯನ್ನು ನಾನು
ಸ್ವೀಕರಿಸಿಕೊಳ್ಳಬೇಕು” ಎಂದು ಹೇಳಿದನು.

### ಅನ್ನನ ಮುಂದೆ ಯೇಸು

(ಮತ್ತಾಯ 26:57-58; ಮಾರ್ಕ 14:53-54; ಲೂಕ 22:54)

12ಬಳಿಕ ಆ ಸೈನಿಕರು, ಅವರ ಸೇನಾಧಿಪತಿ ಹಾಗೂ
ಯೆಹೂದ್ಯ ಕಾವಲುಗಾರರು ಯೇಸುವನ್ನು ಹಿಡಿದು ಕಟ್ಟಿ,
ಅನ್ನನ ಬಳಿಗೆ ತಂದರು. 13ಅನ್ನನು ಕಾಯಫನ ಮಾವ. ಆ ವರ್ಷ
ಕಾಯಫನು ಪ್ರಧಾನಯಾಜಕನಾಗಿದ್ದನು. 14ಎಲ್ಲಾ ಜನರಿ
ಗಾಗಿ ಒಬ್ಬನು ಸಾಯುವುದೇ ಮೇಲು ಎಂಬ ಸಲಹೆಯನ್ನು
ಕೊಟ್ಟಿದ್ದವನು ಇವನೇ.

### ಪೇತ್ರನ ವಿಶ್ವಾಸದ್ರೋಹ

15ಸೀಮೋನ್ ಪೇತ್ರ ಮತ್ತು ಯೇಸುವಿನ ಶಿಷ್ಯರಲ್ಲಿ
ಮತ್ತೊಬ್ಬನು ಯೇಸುವಿನೊಂದಿಗೆ ಹೋದರು. ಆ ಮತ್ತೊಬ್ಬ
ಶಿಷ್ಯನಿಗೆ ಪ್ರಧಾನಯಾಜಕನ ಪರಿಚಯವಿತ್ತು. ಆದ್ದರಿಂದ
ಅವನು ಪ್ರಧಾನಯಾಜಕನ ಮನೆಯ ಅಂಗಳದೊಳಗೆ
ಹೋದನು. 16ಆದರೆ ಪೇತ್ರನು ಹೊರಗೆ ಬಾಗಿಲಿನ ಸಮೀಪ
ದಲ್ಲಿ ಕಾದುಕೊಂಡಿದ್ದನು. ಪ್ರಧಾನಯಾಜಕನ ಪರಿಚಯವಿದ್ದ
ಶಿಷ್ಯನು ಹೊರಗೆ ಬಂದು ದ್ವಾರಪಾಲಕಿಯೊಂದಿಗೆ ಮಾತಾಡಿ
ಪೇತ್ರನನ್ನು ಒಳಗೆ ಕರೆದುಕೊಂಡು ಹೋದನು. 17ದ್ವಾರ

ಪಾಲಕಿಯು ಪೇತ್ರನಿಗೆ, ‘‘ಆ ಮನುಷ್ಯನ ಶಿಷ್ಯರಲ್ಲಿ ನೀನೂ
ಒಬ್ಬನಲ್ಲವೇ?’’ ಎಂದು ಕೇಳಿದಳು.
ಪೇತ್ರನು, ‘‘ಇಲ್ಲ, ನಾನಲ್ಲ’’ ಎಂದು ಉತ್ತರಕೊಟ್ಟನು.
18 ಆಗ ಚಳಿಯಿದ್ದುದರಿಂದ ಕಾವಲುಗಾರರು ಬೆಂಕಿ ಹಾಕಿ ಅದರ
ಸುತ್ತಲೂ ನಿಂತುಕೊಂಡು ತಮ್ಮನ್ನು ಬೆಚ್ಚಗೆ ಮಾಡಿಕೊಳ್ಳು
ತ್ತಿದ್ದರು. ಪೇತ್ರನು ಅವರೊಂದಿಗೆ ನಿಂತುಕೊಂಡಿದ್ದನು.

### ಪ್ರಧಾನಯಾಜಕನು ಮಾಡಿದ ವಿಚಾರಣೆ

(ಮತ್ತಾಯ 26:69-70; ಮಾರ್ಕ 14:66-68; ಲೂಕ 22:55-57)

19 ಪ್ರಧಾನಯಾಜಕನು ಯೇಸುವಿಗೆ ಆತನ ಶಿಷ್ಯರ
ಬಗ್ಗೆಯೂ ಆತನು ಉಪದೇಶಿಸಿದ ಸಂಗತಿಗಳ ಬಗ್ಗೆಯೂ
ಪ್ರಶ್ನೆಗಳನ್ನು ಕೇಳಿದನು. 20 ಅದಕ್ಕೆ ಯೇಸು, ‘‘ನಾನು ಬಹಿ
ರಂಗವಾಗಿ ಜನರೊಂದಿಗೆ ಮಾತಾಡಿದ್ದೇನೆ; ಯಾವಾಗಲೂ
ಸಭಾಮಂದಿರಗಳಲ್ಲಿ ಮತ್ತು ದೇವಾಲಯದಲ್ಲಿ ಬೋಧಿಸಿ
ದ್ದೇನೆ. ಯೆಹೂದ್ಯರೆಲ್ಲರೂ ಅಲ್ಲಿಗೆ ಒಟ್ಟಾಗಿ ಸೇರಿಬರುತ್ತಿದ್ದರು.
ನಾನು ಯಾವುದನ್ನೂ ರಹಸ್ಯವಾಗಿ ಎಂದೂ ಹೇಳಿಲ್ಲ. 21 ಹೀಗಿ
ರಲು, ನೀನು ನನ್ನನ್ನು ಪ್ರಶ್ನಿಸುವುದೇಕೆ? ನನ್ನ ಉಪದೇಶವನ್ನು
ಕೇಳಿದ ಜನರನ್ನು ಕೇಳು. ನಾನು ಹೇಳಿದ್ದನ್ನು ಅವರು ಬಲ್ಲರು’’
ಎಂದು ಉತ್ತರ ಕೊಟ್ಟನು.
22 ಯೇಸು ಹೀಗೆ ಹೇಳಿದ ಕೂಡಲೇ, ಅಲ್ಲಿ ನಿಂತಿದ್ದ ಕಾವಲು
ಗಾರರಲ್ಲಿ ಒಬ್ಬನು ಯೇಸುವಿಗೆ ಹೊಡೆದು, ‘‘ನೀನು ಪ್ರಧಾನ
ಯಾಜಕನೊಂದಿಗೆ ಆ ರೀತಿ ಮಾತಾಡಕೂಡದು’’ ಎಂದನು.
23 ಯೇಸು, ‘‘ನಾನು ತಪ್ಪಾಗಿ ಮಾತಾಡಿದ್ದರೆ, ನಾನು
ಹೇಳಿದ್ದು ತಪ್ಪೆಂದು ಎಲ್ಲರಿಗೂ ತೋರಿಸಿಕೊಡು. ಆದರೆ ನಾನು
ಹೇಳಿದ್ದು ಸರಿಯಾಗಿದ್ದರೆ ನೀನು ನನ್ನನ್ನು ಹೊಡೆಯುವು
ದೇಕೆ?’’ ಎಂದು ಉತ್ತರಕೊಟ್ಟನು.
24 ಆಗ ಅನ್ನನು ಯೇಸುವನ್ನು ಮತ್ತೆ ಕಟ್ಟಿಸಿ, ಪ್ರಧಾನ
ಯಾಜಕನಾದ ಕಾಯಫನ ಬಳಿಗೆ ಕಳುಹಿಸಿದನು.

### ಮತ್ತೊಮ್ಮೆ ಪೇತ್ರನ ವಿಶ್ವಾಸದ್ರೋಹ

(ಮತ್ತಾಯ 26:59-66; ಮಾರ್ಕ 14:55-64; ಲೂಕ 22:66-71)

25 ಸೀಮೋನ್ ಪೇತ್ರನು ತನ್ನನ್ನು ಬೆಚ್ಚಗೆ ಮಾಡಿಕೊಳ್ಳುತ್ತಾ
ಬೆಂಕಿಯ ಸಮೀಪದಲ್ಲಿ ನಿಂತುಕೊಂಡಿದ್ದನು. ಅಲ್ಲಿದ್ದವರು
ಪೇತ್ರನಿಗೆ, ‘‘ಆ ಮನುಷ್ಯನ ಶಿಷ್ಯರಲ್ಲಿ ನೀನೂ ಒಬ್ಬನಲ್ಲವೇ?’’
ಎಂದು ಕೇಳಿದರು.
ಆದರೆ ಪೇತ್ರನು, ‘‘ಇಲ್ಲ, ನಾನಲ್ಲ’’ ಎಂದು ಹೇಳಿದನು.
26 ಪ್ರಧಾನಯಾಜಕನ ಸೇವಕರಲ್ಲಿ ಒಬ್ಬನು ಪೇತ್ರನಿಂದ
ಕಿವಿ ಕತ್ತರಿಸಿ ಹಾಕಲ್ಪಟ್ಟ ಸೇವಕನ ಸಂಬಂಧಿಕನಾಗಿದ್ದನು. ಆ
ಸೇವಕನು, ‘‘ನೀನು ತೋಟದಲ್ಲಿ ಅವನೊಂದಿಗೆ (ಯೇಸುವಿ
ನೊಂದಿಗೆ) ಇದ್ದುದನ್ನು ನಾನು ನೋಡಿದಂತಿದೆ!’’ ಎಂದು
ಹೇಳಿದನು.
27 ಆದರೆ ಪೇತ್ರನು ಮತ್ತೆ, ‘‘ಇಲ್ಲ, ನಾನು ಆತನೊಂದಿಗೆ
ಇರಲಿಲ್ಲ!’’ ಎಂದನು. ಆ ಕೂಡಲೇ ಕೋಳಿ ಕೂಗಿತು.

### ಪಿಲಾತನ ಮುಂದೆ ಯೇಸು

(ಮತ್ತಾಯ 27:1-2, 11-31; ಮಾರ್ಕ 15:1-20; ಲೂಕ 23:1-25)

28 ಬಳಿಕ ಯೆಹೂದ್ಯರು ಯೇಸುವನ್ನು ಕಾಯಫನ ಮನೆ
ಯಿಂದ ರೋಮ್ ರಾಜ್ಯಪಾಲನ ಭವನಕ್ಕೆ ಕರೆದುಕೊಂಡು
ಬಂದರು. ಆಗ ಮುಂಜಾನೆಯಾಗಿತ್ತು. ಯೆಹೂದ್ಯರು ಭವನ
ದೊಳಗೆ ಹೋಗಲಿಲ್ಲ. ಅವರು ಪಸ್ಕಹಬ್ಬದ ಊಟಮಾಡ
ಬೇಕೆಂದಿದ್ದ ಕಾರಣ ತಮ್ಮನ್ನು ಅಶುದ್ಧರನ್ನಾಗಿ ಮಾಡಿಕೊಳ್ಳಲು
ಇಷ್ಟಪಡಲಿಲ್ಲ. 29 ಆದ್ದರಿಂದ ಪಿಲಾತನು ಆ ಯೆಹೂದ್ಯರ ಬಳಿಗೆ
ಬಂದು, ‘‘ಈ ಮನುಷ್ಯನ ಮೇಲೆ ನೀವು ಹೊರಿಸುತ್ತಿರುವ
ಅಪರಾಧಗಳೇನು?’’ ಎಂದು ಕೇಳಿದನು.
30 ಯೆಹೂದ್ಯರು, ‘‘ಇವನು ಒಬ್ಬ ಕೆಟ್ಟ ಮನುಷ್ಯ. ಆದ
ಕಾರಣ, ನಾವು ಇವನನ್ನು ನಿನ್ನ ಬಳಿಗೆ ಕರೆದುಕೊಂಡು
ಬಂದೆವು’’ ಎಂದು ಉತ್ತರಕೊಟ್ಟರು.
31 ಪಿಲಾತನು ಯೆಹೂದ್ಯರಿಗೆ, ‘‘ಯೆಹೂದ್ಯರಾದ ನೀವೇ
ಇವನನ್ನು ಕರೆದುಕೊಂಡು ಹೋಗಿ ನಿಮ್ಮ ಧರ್ಮಶಾಸ್ತ್ರದ
ಪ್ರಕಾರ ತೀರ್ಪು ಮಾಡಿ’’ ಎಂದು ಹೇಳಿದನು.
ಯೆಹೂದ್ಯರು, ‘‘ಆದರೆ ಒಬ್ಬನಿಗೆ ಮರಣದಂಡನೆ
ವಿಧಿಸಲು ನಿನ್ನ ಕಾನೂನು ನಮಗೆ ಅವಕಾಶ ಕೊಡುವುದಿಲ್ಲ’’
ಎಂದು ಉತ್ತರಕೊಟ್ಟರು. 32 (ತಾನು ಸಾಯುವ ರೀತಿಯ ಬಗ್ಗೆ
ಯೇಸು ಹೇಳಿದ್ದ ಮಾತು ಹೀಗೆ ನಿಜವಾಯಿತು.)
33 ಬಳಿಕ ಪಿಲಾತನು, ಭವನದೊಳಗೆ ಹಿಂತಿರುಗಿ ಹೋಗಿ,
ಯೇಸುವನ್ನು ಕರೆದು, ‘‘ನೀನು ಯೆಹೂದ್ಯರ ರಾಜನೋ?’’
ಎಂದು ಕೇಳಿದನು.
34 ಯೇಸು, ‘‘ಇದು ನಿನ್ನ ಪ್ರಶ್ನೆಯೋ? ಅಥವಾ ನನ್ನ ಬಗ್ಗೆ
ಬೇರೆ ಜನರು ನಿನಗೆ ತಿಳಿಸಿದರೋ?’’ ಎಂದನು.
35 ಪಿಲಾತನು, ‘‘ನಾನು ಯೆಹೂದ್ಯನಲ್ಲ! ನಿನ್ನ ಸ್ವಂತ ಜನರು
ಮತ್ತು ಅವರ ಮಹಾಯಾಜಕರು ನಿನ್ನನ್ನು ಕರೆದುಕೊಂಡು
ಬಂದು ನನ್ನ ಮುಂದೆ ನಿಲ್ಲಿಸಿದ್ದಾರೆ. ನೀನು ಏನು ಮಾಡಿದೆ?’’
ಎಂದು ಕೇಳಿದನು.
36 ಯೇಸು, ‘‘ನನ್ನ ರಾಜ್ಯವು ಈ ಲೋಕಕ್ಕೆ ಸೇರಿದ್ದಲ್ಲ. ಅದು
ಈ ಲೋಕಕ್ಕೆ ಸೇರಿದ್ದಾಗಿದ್ದರೆ, ಯೆಹೂದ್ಯರ ಕೈಗೆ ನಾನು
ಸಿಗದಂತೆ ನನ್ನ ಸೇವಕರು ಹೋರಾಡುತ್ತಿದ್ದರು. ಆದರೆ ನನ್ನ
ರಾಜ್ಯವು ಮತ್ತೊಂದು ಸ್ಥಳದ್ದು’’ ಎಂದನು.
37 ಪಿಲಾತನು, ‘‘ಹಾಗಾದರೆ ನೀನು ರಾಜ!’’ ಎಂದನು.
ಯೇಸು, ‘‘ನೀನೇ ನನ್ನನ್ನು ರಾಜನೆಂದು ಹೇಳುತ್ತಿರುವೆ.
ಅದು ಸತ್ಯ. ನಾನು ಜನರಿಗೆ ಸತ್ಯದ ಬಗ್ಗೆ ಹೇಳುವುದಕ್ಕಾಗಿಯೇ
ಹುಟ್ಟಿದೆನು. ಆದಕಾರಣವೇ ನಾನು ಈ ಲೋಕಕ್ಕೆ ಬಂದೆನು.
ಮತ್ತು ಸತ್ಯಕ್ಕೆ ಸೇರಿದ ಪ್ರತಿಯೊಬ್ಬನೂ ನನಗೆ ಕಿವಿಗೊಡುತ್ತಾನೆ’’
ಎಂದು ಉತ್ತರಕೊಟ್ಟನು. 38 ಪಿಲಾತನು, ‘‘ಸತ್ಯವೆಂದರೇನು?’’
ಎಂದು ಹೇಳಿ, ಮತ್ತೆ ಯೆಹೂದ್ಯರ ಬಳಿಗೆ ಹೊರಕ್ಕೆ ಬಂದನು.
ಅವನು ಯೆಹೂದ್ಯರಿಗೆ, ‘‘ಈ ಮನುಷ್ಯನ ಮೇಲೆ ಅಪವಾದ
ಹೊರಿಸಲು ನನಗೆ ಏನೂ ಕಾಣುತ್ತಿಲ್ಲ. 39 ಆದರೆ ಪಸ್ಕಹಬ್ಬದ
ಕಾಲದಲ್ಲಿ ನಾನು ನಿಮಗೋಸ್ಕರ ಕೈದಿಗಳಲ್ಲಿ ಒಬ್ಬನನ್ನು
ಬಿಡುಗಡೆ ಮಾಡುವುದು ನಿಮ್ಮ ಪದ್ಧತಿಯಾಗಿದೆ. ನಾನು
ಯೆಹೂದ್ಯರ ರಾಜನನ್ನು ಬಿಡುಗಡೆ ಮಾಡಬೇಕೆಂದು ನೀವು
ಬಯಸುತ್ತೀರಾ?’’ ಎಂದು ಕೇಳಿದನು. 40 ಯೆಹೂದ್ಯರು,
‘‘ಇಲ್ಲ, ಅವನನ್ನಲ್ಲ! ಬರಬ್ಬನಿಗೆ ಬಿಡುಗಡೆಯಾಗಲಿ!’’ ಎಂದು
ಕೂಗಿದರು. (ಬರಬ್ಬನು ಒಬ್ಬ ದರೋಡೆಕೋರ.)

19 ಬಳಿಕ, ಯೇಸುವನ್ನು ಕರೆದುಕೊಂಡು ಹೋಗಿ,
ಕೊರಡೆಯಿಂದ ಹೊಡೆಯಬೇಕೆಂದು ಪಿಲಾತನು
ಆಜ್ಞಾಪಿಸಿದನು. 2 ಸೈನಿಕರು ಮುಳ್ಳುಬಳ್ಳಿಗಳಿಂದ ಒಂದು ಕಿರೀಟ

ವನ್ನು ಮಾಡಿ ಯೇಸುವಿನ ತಲೆಯ ಮೇಲೆ ಇಟ್ಟರು. ಬಳಿಕ
ಸೈನಿಕರು ಯೇಸುವಿಗೆ ಕಡುಕೆಂಪಾದ ಅಂಗಿಯನ್ನು ತೊಡಿಸಿ
ದರು. 3ಸೈನಿಕರು ಪದೇಪದೇ ಯೇಸುವಿನ ಬಳಿಗೆ ಬಂದು,
''ಯೆಹೂದ್ಯರ ರಾಜನೇ, ನಿನಗೆ ನಮಸ್ಕಾರ!'' ಎಂದು
ಹೇಳುತ್ತಾ ಆತನ ಕೆನ್ನೆಗೆ ಹೊಡೆದರು.

4ಪಿಲಾತನು ಮತ್ತೆ ಹೊರಗೆ ಬಂದು, ಯೆಹೂದ್ಯರಿಗೆ,
''ನೋಡಿ! ನಾನು ಯೇಸುವನ್ನು ನಿಮ್ಮ ಬಳಿಗೆ ತರುತ್ತಿದ್ದೇನೆ.
ನನಗೆ ಆತನಲ್ಲಿ ಯಾವ ಅಪರಾಧವೂ ಕಾಣಲಿಲ್ಲ ಎಂಬುದು
ನಿಮಗೆ ತಿಳಿದಿರಲಿ'' ಎಂದು ಹೇಳಿದನು. 5ಆಗ ಯೇಸು ಹೊರಗೆ
ಬಂದನು. ಆತನ ತಲೆಯ ಮೇಲೆ ಮುಳ್ಳಿನ ಕಿರೀಟವನ್ನು
ಇಟ್ಟಿದ್ದರು. ಮತ್ತು ಕೆಂಪು ಅಂಗಿಯನ್ನು ಆತನಿಗೆ ತೊಡಿಸಿದ್ದರು.
ಪಿಲಾತನು ಯೆಹೂದ್ಯರಿಗೆ, ''ಇಗೋ, ಈ ಮನುಷ್ಯನು!''
ಎಂದು ಹೇಳಿದನು. 6ಮಹಾಯಾಜಕರು ಮತ್ತು ಯೆಹೂದ್ಯ
ಕಾವಲುಗಾರರು ಯೇಸುವನ್ನು ಕಂಡು, ''ಅವನನ್ನು ಶಿಲುಬೆಗೆ
ಹಾಕಿಸು! ಅವನನ್ನು ಶಿಲುಬೆಗೆ ಹಾಕಿಸು! ಎಂದು ಕೂಗಿದರು.

ಆದರೆ ಪಿಲಾತನು, ''ನೀವೇ ಆತನನ್ನು ಶಿಲುಬೆಗೆ ಹಾಕಿರಿ.
ನನಗೆ ಆತನಲ್ಲಿ ಯಾವ ಅಪರಾಧವೂ ಕಾಣಲಿಲ್ಲ'' ಎಂದು
ಉತ್ತರ ಕೊಟ್ಟನು.

7ಯೆಹೂದ್ಯರು, ''ನಮಗೊಂದು ನಿಯಮವಿದೆ. ಅದರ
ಪ್ರಕಾರ ಇವನಿಗೆ ಮರಣದಂಡನೆ ಆಗಲೇಬೇಕು. ಯಾಕೆಂದರೆ
ಇವನು ತನ್ನನ್ನು ದೇವರ ಮಗನೆಂದು ಹೇಳಿಕೊಂಡಿದ್ದಾನೆ''
ಎಂದು ಉತ್ತರಕೊಟ್ಟರು.

8ಪಿಲಾತನು ಇದನ್ನು ಕೇಳಿ ಬಹು ಭಯಗೊಂಡು, 9ಮತ್ತೆ
ಭವನದೊಳಗೆ ಹೋಗಿ, ಯೇಸುವಿಗೆ, ''ನೀನು ಎಲ್ಲಿಯ
ವನು?'' ಎಂದು ಕೇಳಿದನು. ಆದರೆ ಯೇಸು ಮೌನ
ವಾಗಿದ್ದನು. 10ಪಿಲಾತನು, ''ನೀನು ನನ್ನೊಂದಿಗೆ ಮಾತಾಡುವು
ದಿಲ್ಲವೇ? ನಿನ್ನನ್ನು ಬಿಡಿಸುವ ಅಧಿಕಾರವೂ ನಿನ್ನನ್ನು ಶಿಲುಬೆಗೆ
ಹಾಕಿಸುವ ಅಧಿಕಾರವೂ ನನಗಿದೆ ಎಂಬುದು ನಿನಗೆ
ತಿಳಿಯದೋ?'' ಎಂದನು.

11ಯೇಸು, ''ನನ್ನ ಮೇಲೆ ನಿನಗಿರುವ ಅಧಿಕಾರವೆಂದರೆ
ದೇವರು ನಿನಗೆ ಕೊಟ್ಟಿರುವ ಅಧಿಕಾರವೊಂದೇ. ಆದ್ದರಿಂದ
ನನ್ನನ್ನು ನಿನ್ನ ಕೈಗೆ ಒಪ್ಪಿಸಿದವನಿಗೆ ಹೆಚ್ಚಿನ ಪಾಪದೋಷ
ವಿರುವುದು'' ಎಂದು ಉತ್ತರಕೊಟ್ಟನು.

12ಇದಾದ ಮೇಲೆ, ಯೇಸುವನ್ನು ಬಿಡುಗಡೆ ಮಾಡಲು
ಪಿಲಾತನು ಪ್ರಯತ್ನಿಸಿದನು. ಆದರೆ ಯೆಹೂದ್ಯರು, ''ತನ್ನನ್ನು
ರಾಜನೆಂದು ಹೇಳಿಕೊಳ್ಳುವ ಯಾವ ವ್ಯಕ್ತಿಯಾಗಲೀ ಸೀಸರನ
ವಿರೋಧಿಯಾಗಿದ್ದಾನೆ. ಆದ್ದರಿಂದ ನೀನು ಈ ಮನುಷ್ಯನನ್ನು
(ಯೇಸುವನ್ನು) ಬಿಡುಗಡೆ ಮಾಡಿದರೆ, ನೀನು ಸೀಸರನ
ಮಿತ್ರನಲ್ಲವೆಂದೇ ಅದರ ಅರ್ಥ'' ಎಂದು ಕೂಗಿದರು.

13ಯೆಹೂದ್ಯರು ಹೇಳಿದ್ದನ್ನು ಕೇಳಿ ಪಿಲಾತನು
ಯೇಸುವನ್ನು ಹೊರಗೆ ಕರೆಯಿಸಿ, ''ಹಾಸುಗಲ್ಲು'' ಎಂಬ
ಕಟ್ಟೆಯ (ಯೆಹೂದ್ಯರ ಭಾಷೆಯಲ್ಲಿ* ಅದರ ಹೆಸರು ಗಬ್ಬಥ.)
ಮೇಲಿದ್ದ ನ್ಯಾಯಪೀಠದಲ್ಲಿ ಕುಳಿತುಕೊಂಡನು. 14ಅಂದು
ಪಸ್ಕಹಬ್ಬದ ಸಿದ್ಧತೆಯ ದಿನ, ಮತ್ತು ಆಗಲೇ ಮಧ್ಯಾಹ್ನವಾಗಿತ್ತು.
ಪಿಲಾತನು ಯೆಹೂದ್ಯರಿಗೆ, ''ಇಗೋ, ನಿಮ್ಮ ರಾಜನು!''
ಎಂದು ಹೇಳಿದನು.

15ಯೆಹೂದ್ಯರು, ''ಕೊಲ್ಲಿರಿ, ಕೊಲ್ಲಿರಿ; ಅವನನ್ನು ಶಿಲುಬೆ
ಗೇರಿಸಿರಿ!'' ಎಂದು ಕಿರುಚಿದರು.

ಪಿಲಾತನು ಯೆಹೂದ್ಯರಿಗೆ, ''ನಿಮ್ಮ ರಾಜನನ್ನು ಶಿಲುಬೆ
ಗೇರಿಸಬೇಕೇ?'' ಎಂದು ಕೇಳಿದನು.

ಮಹಾಯಾಜಕರು, ''ನಮಗಿರುವ ಒಬ್ಬನೇ ರಾಜನೆಂದರೆ
ಸೀಸರ್!'' ಎಂದು ಉತ್ತರಕೊಟ್ಟರು.

16ಆಗ ಪಿಲಾತನು, ಯೇಸುವನ್ನು ಶಿಲುಬೆಗೇರಿಸಲು
ಅವರಿಗೆ ಒಪ್ಪಿಸಿಕೊಟ್ಟನು.

### ಯೇಸುವನ್ನು ಶಿಲುಬೆಗೇರಿಸಿದರು

(ಮತ್ತಾಯ 27:32-44; ಮಾರ್ಕ 15:21-32; ಲೂಕ 23:26-43)

ಸೈನಿಕರು ಯೇಸುವನ್ನು ಕರೆದೊಯ್ದರು. 17ಯೇಸು ತನ್ನ
ಸ್ವಂತ ಶಿಲುಬೆಯನ್ನು ಹೊತ್ತುಕೊಂಡು, ''ಕಪಾಲ'' ಎಂಬ
ಸ್ಥಳಕ್ಕೆ ಹೊರಟನು. (ಯೆಹೂದ್ಯರ ಭಾಷೆಯಲ್ಲಿ ಈ ಸ್ಥಳದ
ಹೆಸರು ''ಗೊಲ್ಗೊಥಾ.'') 18ಅವರು ಗೊಲ್ಗೊಥಾದಲ್ಲಿ
ಯೇಸುವನ್ನೂ ಆತನ ಸಂಗಡ ಇನ್ನಿಬ್ಬರನ್ನೂ ಶಿಲುಬೆಗೇರಿ
ಸಿದರು. ಅವರಿಬ್ಬರನ್ನು ಯೇಸುವಿನ ಎರಡು ಕಡೆಗಳಲ್ಲಿ ಹಾಕಿ,
ಯೇಸುವನ್ನು ಅವರ ಮಧ್ಯದಲ್ಲಿ ಹಾಕಿದರು. 19ಪಿಲಾತನು
ಒಂದು ಫಲಕವನ್ನು ಬರೆದು ಶಿಲಬೆಯ ಮೇಲೆ ಹಚ್ಚಿದನು. ಆ
ಫಲಕದಲ್ಲಿ, ''ನಜರೇತಿನ ಯೇಸು, ಯೆಹೂದ್ಯರ ರಾಜನು''
ಎಂದು ಬರೆದಿತ್ತು. 20ಆ ಫಲಕವನ್ನು ಯೆಹೂದ್ಯರ ಭಾಷೆಯಲ್ಲಿ,
ಲ್ಯಾಟಿನ್ ಮತ್ತು ಗ್ರೀಕ್ ಭಾಷೆಗಳಲ್ಲಿ ಬರೆಯಲಾಗಿತ್ತು.
ಫಲಕದಲ್ಲಿ ಬರೆದಿರುವುದನ್ನು ಅನೇಕ ಯೆಹೂದ್ಯರು
ಓದಿದರು. ಏಕೆಂದರೆ ಯೇಸುವನ್ನು ಶಿಲುಬೆಯ ಮೇಲೆ ಕೊಂದ
ಸ್ಥಳವು ಪಟ್ಟಣದ ಸಮೀಪದಲ್ಲಿತ್ತು. 21ಯೆಹೂದ್ಯ ಮಹಾ
ಯಾಜಕರು ಪಿಲಾತನಿಗೆ, ''ಯೆಹೂದ್ಯರ ರಾಜನು' ಎಂದು
ಬರೆಯಬೇಡ. ಆದರೆ, 'ಇವನು ತನ್ನನ್ನು ಯೆಹೂದ್ಯರ ರಾಜ'
ಎಂದು ಹೇಳಿಕೊಂಡನು ಎಂಬುದಾಗಿ ಬರೆ'' ಎಂದರು.

22ಪಿಲಾತನು, ''ನಾನು ಬರೆದಿರುವುದನ್ನು ಬದಲಾಯಿಸ
ಲಾಗುವುದಿಲ್ಲ'' ಎಂದು ಉತ್ತರಕೊಟ್ಟನು. 23ಸೈನಿಕರು ಯೇಸು
ವನ್ನು ಶಿಲುಬೆಗೇರಿಸಿದ ಬಳಿಕ ಆತನ ಬಟ್ಟೆಗಳನ್ನು ನಾಲ್ಕು ಭಾಗ
ಮಾಡಿ ಒಬ್ಬೊಬ್ಬರು ಒಂದೊಂದು ಭಾಗವನ್ನು ತೆಗೆದು
ಕೊಂಡರು. ಅಲ್ಲದೆ ಆತನ ಒಳಂಗಿಯನ್ನು ಸಹ ತೆಗೆದು
ಕೊಂಡರು. ಅದು ಹೊಲಿಗೆಯಿಲ್ಲದೆ ಮೇಲಿನಿಂದ ಕೆಳಗಿನವರೆಗೆ
ಹೆಣೆದದ್ದಾಗಿತ್ತು. 24ಆದ್ದರಿಂದ ಸೈನಿಕರು, ''ನಾವು ಇದನ್ನು
ಹರಿದು ಪಾಲುಮಾಡಬಾರದು. ನಾವು ಚೀಟಿಹಾಕಿ ಇದು
ಯಾರಿಗೆ ಬರುತ್ತದೊ ನೋಡೋಣ'' ಎಂದು ಮಾತಾಡಿ
ಕೊಂಡು ಹಾಗೆಯೇ ಮಾಡಿದರು.

> ''ಅವರು ನನ್ನ ಬಟ್ಟೆಗಳನ್ನು ತಮ್ಮಲ್ಲಿ ಪಾಲುಮಾಡಿ
> ಕೊಂಡರು; ನನ್ನ ಅಂಗಿಗಾಗಿ ಚೀಟಿ ಹಾಕಿದರು.''
> *ಕೀರ್ತನೆ 22:18*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿರುವ ಮಾತು ಹೀಗೆ
ನೆರವೇರಿತು.

25ಯೇಸುವಿನ ತಾಯಿ, ತಾಯಿಯ ಸಹೋದರಿ, ಕ್ಲೋಪನ
ಹೆಂಡತಿಯಾದ ಮರಿಯಳು ಮತ್ತು ಮಗ್ದಲದ ಮರಿಯಳು

---

**ಯೆಹೂದ್ಯರ ಭಾಷೆ** ಅಂದರೆ ಆರ್ಯಮೇಯಿಕ್ ಭಾಷೆ.

ಶಿಲುಬೆಯ ಬಳಿಯಲ್ಲಿ ನಿಂತುಕೊಂಡಿದ್ದರು. 26ಯೇಸು ತನ್ನ
ತಾಯಿಯನ್ನೂ ಅಲ್ಲೇ ನಿಂತಿದ್ದ ತನ್ನ ಪ್ರೀತಿಯ ಶಿಷ್ಯನನ್ನೂ
ನೋಡಿ ತನ್ನ ತಾಯಿಗೆ, ‘‘ಅಮ್ಮಾ ಇಗೋ, ನಿನ್ನ ಮಗನು’’
ಎಂದು ಹೇಳಿದನು. 27ಬಳಿಕ ಯೇಸು ಆ ಶಿಷ್ಯನಿಗೆ, ‘‘ಇಗೋ,
ನಿನ್ನ ತಾಯಿ’’ ಎಂದನು. ಅಂದಿನಿಂದ ಆ ಶಿಷ್ಯನು ಆಕೆಯನ್ನು
ಕರೆದುಕೊಂಡು ಹೋಗಿ ತನ್ನ ಮನೆಯಲ್ಲೇ ಇರಿಸಿಕೊಂಡನು.

## ಯೇಸುವಿನ ಮರಣ

(ಮತ್ತಾಯ 27:45-56; ಮಾರ್ಕ 15:33-41; ಲೂಕ 23:44-49)

28ಇದಾದ ಮೇಲೆ ಎಲ್ಲವೂ ನೆರವೇರಿತೆಂದು ತಿಳಿದು
ಕೊಂಡು ಆತನು ಪವಿತ್ರ ಗ್ರಂಥದ ಮಾತನ್ನು ನೆರವೇರಿಸು
ವುದಕ್ಕಾಗಿ, ‘‘ನನಗೆ ದಾಹವಾಗಿದೆ* ’’ ಎಂದು ಹೇಳಿದನು.
29ಅಲ್ಲಿ ಹುಳಿರಸ ತುಂಬಿದ ಪಾತ್ರೆಯೊಂದಿತ್ತು. ಸೈನಿಕರು
ಸ್ಪಂಜನ್ನು ಹುಳಿರಸದಲ್ಲಿ ತೋಯಿಸಿ ಹಿಸ್ಸೋಪ್ ಗಿಡದ
ಕೋಲಿಗೆ ಸಿಕ್ಕಿಸಿ ಅದನ್ನು ಮೇಲೆತ್ತಿ ಯೇಸುವಿನ ಬಾಯಿಗೆ
ಮುಟ್ಟಿಸಿದರು. 30ಯೇಸು ಹುಳಿರಸವನ್ನು ರುಚಿನೋಡಿ,
‘‘ತೀರಿತು’’ ಎಂದು ಹೇಳಿ ತಲೆಬಾಗಿ ಪ್ರಾಣಬಿಟ್ಟನು.
31ಆ ದಿನವು ಸಿದ್ಧತೆಯ ದಿನವಾಗಿತ್ತು. ಮರುದಿನ
ವಿಶೇಷವಾದ ಸಬ್ಬತ್‌ದಿನವಾಗಿತ್ತು. ಸಬ್ಬತ್‌ದಿನದಂದು ದೇಹ
ಗಳು ಶಿಲುಬೆಯ ಮೇಲಿರುವುದು ಯೆಹೂದ್ಯರಿಗೆ ಇಷ್ಟವಿರ
ಲಿಲ್ಲ. ಆದ್ದರಿಂದ ಅವರ ಕಾಲುಗಳನ್ನು ಮುರಿದು ಬೇಗನೆ
ಸಾಯಿಸಲು ಆಜ್ಞಾಪಿಸಬೇಕೆಂಬುದಾಗಿ ಅವರು ಪಿಲಾತನನ್ನು
ಕೇಳಿಕೊಂಡರು. 32ಆದ್ದರಿಂದ ಸೈನಿಕರು ಬಂದು ಯೇಸುವಿ
ನೊಂದಿಗೆ ಶಿಲುಬೆಗೇರಿಸಲ್ಪಟ್ಟಿದ್ದ ಇಬ್ಬರ ಕಾಲುಗಳನ್ನು
ಮುರಿದುಹಾಕಿದರು. 33ಬಳಿಕ ಅವರು ಯೇಸುವಿನ ಅತಿ
ಸಮೀಪಕ್ಕೆ ಬಂದಾಗ ಆತನು ಆಗಲೇ ಸತ್ತುಹೋಗಿರುವುದನ್ನು
ಕಂಡು ಆತನ ಕಾಲುಗಳನ್ನು ಮುರಿಯಲಿಲ್ಲ. 34ಆದರೆ ಸೈನಿಕ
ರಲ್ಲಿ ಒಬ್ಬನು ತನ್ನ ಈಟಿಯಿಂದ ಯೇಸುವಿನ ಪಕ್ಕೆಗೆ ತಿವಿದನು.
ಪಕ್ಕೆಯಿಂದ ರಕ್ತ ಮತ್ತು ನೀರು ಹೊರಗೆ ಹರಿದು ಬಂದವು.
35(ಇದನ್ನು ಕಂಡವನೇ ಇದರ ಬಗ್ಗೆ ಹೇಳಿದ್ದಾನೆ. ನೀವು ಸಹ
ನಂಬಬೇಕೆಂದು ಅವನು ಇದನ್ನು ತಿಳಿಸಿದ್ದಾನೆ. ಅವನು ಹೇಳುವ
ಸಂಗತಿಗಳು ಸತ್ಯವಾಗಿವೆ. ತಾನು ಹೇಳುತ್ತಿರುವುದು ಸತ್ಯವೆಂದು
ಅವನಿಗೆ ಗೊತ್ತಿದೆ.) 36ಪವಿತ್ರ ಗ್ರಂಥದಲ್ಲಿ ಬರೆದಿರುವ, ‘‘ಅವನ
ಎಲುಬುಗಳಲ್ಲಿ ಒಂದಾದರೂ ಮುರಿಯಲ್ಪಡುವುದಿಲ್ಲ’’*
ಎಂಬ ಮಾತು ಹೀಗೆ ನೆರವೇರಿತು. 37ಪವಿತ್ರ ಗ್ರಂಥದ
ಮತ್ತೊಂದು ಕಡೆಯಲ್ಲಿ, ‘‘ಜನರು ತಾವು ಈಟಿಯಿಂದ ಇರಿದವ
ನನ್ನೇ ದಿಟ್ಟಿಸಿ ನೋಡುವರು’’* ಎಂತಲೂ ಬರೆದಿದೆ.

## ಯೇಸುವಿನ ಶವಸಂಸ್ಕಾರ

(ಮತ್ತಾಯ 27:57-61; ಮಾರ್ಕ 15:42-47; ಲೂಕ 23:50-56)

38ತರುವಾಯ, ಅರಿಮಥಾಯ ಊರಿನ ಯೋಸೇಫ
ಎಂಬವನು ಯೇಸುವಿನ ದೇಹವನ್ನು ತನಗೆ ಕೊಡಬೇಕೆಂದು
ಪಿಲಾತನನ್ನು ಕೇಳಿಕೊಂಡನು. (ಯೋಸೇಫನು ಯೇಸುವಿನ
ಒಬ್ಬ ಅನುಯಾಯಿ ಆಗಿದ್ದನು. ಆದರೆ ಅವನು ಯೆಹೂದ್ಯರಿಗೆ
ಹೆದರಿಕೊಂಡಿದ್ದರಿಂದ ಅದರ ಬಗ್ಗೆ ಜನರಿಗೆ ಹೇಳಿಕೊಳ್ಳಲಿಲ್ಲ.)
ಯೇಸುವಿನ ದೇಹವನ್ನು ತೆಗೆದುಕೊಂಡು ಹೋಗಲು
ಪಿಲಾತನು ಅವನಿಗೆ ಅಪ್ಪಣೆಕೊಟ್ಟನು. 39ಆದ್ದರಿಂದ ಅವನು
ಬಂದು ಯೇಸುವಿನ ದೇಹವನ್ನು ತೆಗೆದುಕೊಂಡು ಹೋದನು.
ಹಿಂದೊಮ್ಮೆ, ರಾತ್ರಿಯಲ್ಲಿ ಯೇಸುವಿನ ಬಳಿಗೆ ಬಂದು
ಆತನೊಂದಿಗೆ ಮಾತಾಡಿದ್ದವನೇ ನಿಕೋದೇಮನು. ಅವನು
ಸುಮಾರು ಐವತ್ತು ಕಿಲೋಗ್ರಾಮಿನಷ್ಟು ಸುಗಂಧದ್ರವ್ಯಗಳನ್ನು
ತೆಗೆದುಕೊಂಡು ಬಂದನು. ಆ ಸುಗಂಧ ದ್ರವ್ಯವು ರಕ್ತಬೋಳ
ಮತ್ತು ಅಗರುಗಳ ಮಿಶ್ರಣವಾಗಿತ್ತು. 40ಈ ಇಬ್ಬರು ಯೇಸುವಿನ
ದೇಹವನ್ನು ತೆಗೆದುಕೊಂಡು ಅದಕ್ಕೆ ಸುಗಂಧ ದ್ರವ್ಯವನ್ನು ಹಾಕಿ
ನಾರುಬಟ್ಟೆಗಳಿಂದ ಸುತ್ತಿದರು. (ಯೆಹೂದ್ಯರು ಸತ್ತವರನ್ನು
ಇದೇ ರೀತಿ ಸಮಾಧಿ ಮಾಡುತ್ತಾರೆ.) 41ಯೇಸುವನ್ನು
ಶಿಲುಬೆಯ ಮೇಲೆ ಕೊಂದ ಸ್ಥಳದಲ್ಲೇ ಒಂದು ತೋಟವಿತ್ತು.
ಆ ತೋಟದಲ್ಲಿ ಒಂದು ಹೊಸ ಸಮಾಧಿಯಿತ್ತು. ಅದರಲ್ಲಿ
ಹಿಂದೆಂದೂ ಯಾರನ್ನೂ ಸಮಾಧಿ ಮಾಡಿರಲಿಲ್ಲ. 42ಅದು
ಸಮೀಪವಾಗಿದ್ದುದರಿಂದ ಮತ್ತು ಯೆಹೂದ್ಯರು ತಮ್ಮ ಸಬ್ಬತ್
ದಿನವನ್ನು ಆರಂಭಮಾಡಲು ಸಿದ್ಧರಾಗುತ್ತಿದ್ದುದರಿಂದ ಅವರು
ಯೇಸುವನ್ನು ಆ ಸಮಾಧಿಯಲ್ಲಿಟ್ಟರು.

## ಬರಿದಾದ ಸಮಾಧಿ

(ಮತ್ತಾಯ 28:1-10; ಮಾರ್ಕ 16:1-8; ಲೂಕ 24:1-12)

20 ಭಾನುವಾರದ ಮುಂಜಾನೆ ಮಗ್ದಲದ ಮರಿಯಳು
ಯೇಸುವಿನ ದೇಹವಿದ್ದ ಸಮಾಧಿಯ ಬಳಿಗೆ
ಬಂದಳು. ಆಗ ಇನ್ನೂ ಕತ್ತಲಿತ್ತು. ಸಮಾಧಿಯ ಬಾಗಿಲಿಗೆ
ಮುಚ್ಚಿದ್ದ ದೊಡ್ಡ ಕಲ್ಲು ಅಲ್ಲಿಂದ ತೆಗೆದುಹಾಕಲ್ಪಟ್ಟಿರುವುದನ್ನು
ಕಂಡ ಮರಿಯಳು 2ಸೀಮೋನ್ ಪೇತ್ರನ ಮತ್ತು (ಯೇಸು
ಪ್ರೀತಿಸುತ್ತಿದ್ದ) ಮತ್ತೊಬ್ಬ ಶಿಷ್ಯನ ಬಳಿಗೆ ಓಡಿಬಂದು, ‘‘ಅವರು
ಸಮಾಧಿಯೊಳಗಿಂದ ಪ್ರಭುವನ್ನು ತೆಗೆದುಕೊಂಡಿದ್ದಾರೆ, ಆತ
ನನ್ನು ಎಲ್ಲಿಟ್ಟಿದ್ದಾರೋ ನಮಗೆ ಗೊತ್ತಿಲ್ಲ’’ ಎಂದು ಹೇಳಿದಳು.
3ಆದ್ದರಿಂದ ಪೇತ್ರನು ಮತ್ತು ಮತ್ತೊಬ್ಬ ಶಿಷ್ಯನು
ಸಮಾಧಿಯ ಬಳಿಗೆ ಹೊರಟರು. 4ಅವರಿಬ್ಬರೂ ಓಡುತ್ತಾ
ಹೋದರು. ಆದರೆ ಆ ಮತ್ತೊಬ್ಬ ಶಿಷ್ಯನು ಪೇತ್ರನಿಗಿಂತಲೂ
ವೇಗವಾಗಿ ಓಡುತ್ತಾಹೋಗಿ ಸಮಾಧಿಯನ್ನು ಮೊದಲು
ತಲುಪಿದನು. 5ಆ ಶಿಷ್ಯನು ಬಗ್ಗಿ ಒಳಗೆ ನೋಡಿದನು. 6ನಾರು
ಬಟ್ಟೆಯ ತುಂಡುಗಳು ಅಲ್ಲಿ ಬಿದ್ದಿರುವುದನ್ನು ಅವನು ಕಂಡನು.
7ಅಲ್ಲದೆ ಯೇಸುವಿನ ತಲೆಗೆ ಸುತ್ತಿದ್ದ ಬಟ್ಟೆಯನ್ನೂ ಅವನು
ಕಂಡನು. ಆ ಬಟ್ಟೆಯು ಸುತ್ತಲ್ಪಟ್ಟು, ಇತರ ನಾರುಬಟ್ಟೆಗಳಿಂದ
ಪ್ರತ್ಯೇಕವಾಗಿ ಬಿದ್ದಿತ್ತು. 8ಬಳಿಕ ಆ ಮತ್ತೊಬ್ಬ ಶಿಷ್ಯನು ಒಳಗೆ
ಹೋದನು. ಸಮಾಧಿಯನ್ನು ಮೊದಲು ತಲುಪಿದವನೇ ಆ
ಶಿಷ್ಯನು. ಅವನು ಸಂಭವಿಸಿರುವುದನ್ನು ಕಂಡು
ನಂಬಿಕೊಂಡನು. 9(ಯೇಸು ಸತ್ತು ಜೀವಂತವಾಗಿ ಎದ್ದು
ಬರಬೇಕೆಂಬುದಾಗಿ ಪವಿತ್ರ ಗ್ರಂಥದಲ್ಲಿ ಬರೆದಿರುವುದು ಈ
ಶಿಷ್ಯರಿಗೆ ಇನ್ನೂ ಅರ್ಥವಾಗಿರಲಿಲ್ಲ.)

## ಮಗ್ದಲದ ಮರಿಯಳಿಗೆ ಯೇಸುವಿನ ದರ್ಶನ

(ಮಾರ್ಕ 16:9-11)

10ಬಳಿಕ ಶಿಷ್ಯರು ಹಿಂತಿರುಗಿ ಮನೆಗೆ ಹೋದರು. 11ಆದರೆ
ಮರಿಯಳು ಅಳುತ್ತಾ ಸಮಾಧಿಯ ಹೊರಗೆ ನಿಂತು

---

**ನನಗೆ ದಾಹವಾಗಿದೆ** ಕೀರ್ತನೆ 22:15; 69:21

**ಅವನ ... ಮುರಿಯಲ್ಪಡುವುದಿಲ್ಲ** ಕೀರ್ತನೆ 34:20

**ಜನರು ... ನೋಡುವರು** ಜೆಕರ್ಯ 12:10

ಕೊಂಡಿದ್ದಳು. ಆಕೆ ಅಳುತ್ತಾ ಸಮಾಧಿಯೊಳಗೆ ಬಗ್ಗಿ ನೋಡಿ
ದಾಗ, 12ಬಿಳುಪಾದ ಬಟ್ಟೆಗಳನ್ನು ಧರಿಸಿಕೊಂಡಿದ್ದ ಇಬ್ಬರು
ದೇವದೂತರನ್ನು ಕಂಡಳು. ಯೇಸುವಿನ ದೇಹವನ್ನು ಇಟ್ಟಿದ್ದ
ಸ್ಥಳದಲ್ಲಿ ಅವರಲ್ಲೊಬ್ಬನು ಯೇಸುವಿನ ತಲೆಯಿದ್ದ ಕಡೆ
ಯಲ್ಲಿಯೂ ಮತ್ತೊಬ್ಬನು ಪಾದವಿದ್ದ ಕಡೆಯಲ್ಲಿಯೂ ಕುಳಿತು
ಕೊಂಡಿದ್ದರು.

13ದೇವದೂತರು ಮರಿಯಳಿಗೆ, ''ಅಮ್ಮಾ, ಏಕೆ ಅಳು
ತ್ತಿರುವೆ?'' ಎಂದು ಕೇಳಿದರು. ಮರಿಯಳು, ''ನನ್ನ ಪ್ರಭುವಿನ
ದೇಹವನ್ನು ಕೆಲವು ಜನರು ತೆಗೆದುಕೊಂಡು ಹೋಗಿದ್ದಾರೆ.
ಅವರು ಆತನನ್ನು ಎಲ್ಲಿ ಇಟ್ಟಿದ್ದಾರೋ ನನಗೆ ಗೊತ್ತಿಲ್ಲ'' ಎಂದು
ಉತ್ತರಕೊಟ್ಟಳು. 14ಮರಿಯಳು ಹೀಗೆ ಹೇಳಿ ಹಿಂದಕ್ಕೆ
ತಿರುಗಿದಾಗ ಅಲ್ಲೇ ಯೇಸು ನಿಂತಿರುವುದನ್ನು ಕಂಡಳು. ಆದರೆ
ಆತನು ಯೇಸು ಎಂಬುದು ಆಕೆಗೆ ಗೊತ್ತಿರಲಿಲ್ಲ. 15ಯೇಸು
ಆಕೆಯನ್ನು ''ಅಮ್ಮಾ ಏಕೆ ಅಳುತ್ತಿರುವೆ? ನೀನು ಯಾರನ್ನು
ಹುಡುಕುತ್ತಿರುವೆ?'' ಎಂದು ಕೇಳಿದನು.

ತೋಟವನ್ನು ನೋಡಿಕೊಳ್ಳುವವನೇ ಇವನಿರಬಹುದೆಂದು
ಮರಿಯಳು ಯೋಚಿಸಿಕೊಂಡು ಅವನಿಗೆ, ''ಅಯ್ಯಾ, ನೀನು
ಯೇಸುವನ್ನು ತೆಗೆದುಕೊಂಡು ಹೋದೆಯಾ? ಆತನನ್ನು
ಎಲ್ಲಿಟ್ಟಿರುವೆ, ನನಗೆ ಹೇಳು. ನಾನು ಹೋಗಿ ಆತನನ್ನು ತೆಗೆದು
ಕೊಳ್ಳುತ್ತೇನೆ'' ಎಂದು ಹೇಳಿದಳು.

16ಯೇಸು ಆಕೆಗೆ, ''ಮರಿಯಳೇ'' ಎಂದನು.

ಮರಿಯಳು ಯೇಸುವಿನ ಕಡೆಗೆ ತಿರುಗಿ, ಯೆಹೂದ್ಯರ
ಭಾಷೆಯಲ್ಲಿ ''ರಬ್ಬೂನಿ'' ಎಂದಳು. (ರಬ್ಬೂನಿ ಎಂದರೆ
''ಗುರು.'')

17ಯೇಸು ಆಕೆಗೆ, ''ನನ್ನನ್ನು ಹಿಡಿದುಕೊಳ್ಳಬೇಡ. ನಾನು
ತಂದೆಯ ಬಳಿಗೆ ಇನ್ನೂ ಹಿಂತಿರುಗಿ ಹೋಗಿಲ್ಲ. ಆದರೆ ನೀನು
ನನ್ನ ಸಹೋದರರ (ಶಿಷ್ಯರ) ಬಳಿಗೆ ಹೋಗಿ, 'ನನ್ನ ತಂದೆಯೂ
ನಿಮ್ಮ ತಂದೆಯೂ ನನ್ನ ದೇವರೂ ನಿಮ್ಮ ದೇವರೂ
ಆಗಿರುವಾತನ ಬಳಿಗೆ ನಾನು ಹಿಂತಿರುಗಿ ಹೋಗುತ್ತಿದ್ದೇನೆ
ಎಂಬುದಾಗಿ ಹೇಳು'' ಎಂದನು.

18ಮಗ್ದಲದ ಮರಿಯಳು ಶಿಷ್ಯರ ಬಳಿಗೆ ಹೋಗಿ, ''ನಾನು
ಪ್ರಭುವನ್ನು ಕಂಡೆನು!'' ಎಂದು ಹೇಳಿದಳು. ಮತ್ತು ಯೇಸು
ಹೇಳಿದ ಸಂಗತಿಗಳನ್ನು ಆಕೆ ಅವರಿಗೆ ತಿಳಿಸಿದಳು.

### ಶಿಷ್ಯರಿಗೆ ಯೇಸುವಿನ ದರ್ಶನ

(ಮತ್ತಾಯ 28:16-20; ಮಾರ್ಕ 16:14-18; ಲೂಕ 24:36-49)

19ಅಂದು ಭಾನುವಾರ. ಅದೇ ಸಾಯಂಕಾಲ ಶಿಷ್ಯರು
ಒಟ್ಟಾಗಿ ಸೇರಿದ್ದರು. ಅವರು ಯೆಹೂದ್ಯರಿಗೆ ಹೆದರಿ ಬಾಗಿಲು
ಗಳನ್ನು ಮುಚ್ಚಿಕೊಂಡು ಒಳಗೇ ಇದ್ದರು. ಆಗ ಯೇಸು ಬಂದು
ಅವರ ಮಧ್ಯದಲ್ಲಿ ನಿಂತುಕೊಂಡು ಅವರಿಗೆ, ''ಶಾಂತಿಯು
ನಿಮ್ಮೊಂದಿಗಿರಲಿ!'' ಎಂದು ಹೇಳಿದನು. 20ಯೇಸು ಹೀಗೆ
ಹೇಳಿದ ಮೇಲೆ, ತನ್ನ ಕೈಗಳನ್ನು ಮತ್ತು ಪಕ್ಕೆಯನ್ನು ಅವರಿಗೆ
ತೋರಿಸಿದನು. ಪ್ರಭುವನ್ನು ಕಂಡು ಶಿಷ್ಯರಿಗೆ ಬಹು
ಸಂತೋಷವಾಯಿತು.

21ಬಳಿಕ ಯೇಸು ಮತ್ತೆ, ''ಶಾಂತಿಯು ನಿಮ್ಮೊಂದಿಗಿರಲಿ!
ತಂದೆಯು ನನ್ನನ್ನು ಕಳುಹಿಸಿದನು. ಅದೇ ರೀತಿಯಲ್ಲಿ, ಈಗ
ನಾನೂ ನಿಮ್ಮನ್ನು ಕಳುಹಿಸುತ್ತೇನೆ'' ಎಂದು ಹೇಳಿದನು.
22ಯೇಸು ಹೀಗೆ ಹೇಳಿದ ನಂತರ ಶಿಷ್ಯರ ಮೇಲೆ ಉಸಿರೂದಿ,
''ಪವಿತ್ರಾತ್ಮನನ್ನು ಸ್ವೀಕರಿಸಿಕೊಳ್ಳಿ. 23ನೀವು ಯಾರ ಪಾಪ
ಗಳನ್ನು ಕ್ಷಮಿಸುತ್ತೀರೋ ಅವರ ಪಾಪಗಳನ್ನು ಕ್ಷಮಿಸಲಾಗು
ವುದು. ನೀವು ಯಾರ ಪಾಪಗಳನ್ನು ಕ್ಷಮಿಸುವುದಿಲ್ಲವೋ ಅವರ
ಪಾಪಗಳಿಗೆ ಕ್ಷಮೆ ದೊರೆಯುವುದಿಲ್ಲ'' ಎಂದು ಹೇಳಿದನು.

### ತೋಮನಿಗೆ ಯೇಸುವಿನ ದರ್ಶನ

24ಯೇಸು ಬಂದಾಗ ದಿದುಮನೆಂಬ ತೋಮನು ಶಿಷ್ಯ
ರೊಂದಿಗೆ ಇರಲಿಲ್ಲ. ಹನ್ನೆರಡು ಮಂದಿ ಶಿಷ್ಯರಲ್ಲಿ ತೋಮನೂ
ಒಬ್ಬನಾಗಿದ್ದನು. 25ಉಳಿದ ಶಿಷ್ಯರು ತೋಮನಿಗೆ, ''ನಾವು
ಪ್ರಭುವನ್ನು ನೋಡಿದೆವು'' ಎಂದು ಹೇಳಿದರು. ಆದರೆ
ತೋಮನು, ''ಆತನ ಕೈಗಳಲ್ಲಿರುವ ಮೊಳೆಯ ಗಾಯದ
ಗುರುತುಗಳನ್ನು ನಾನು ನೋಡುವವರೆಗೆ, ಮೊಳೆಗಳನ್ನು
ಜಡಿದಿದ್ದ ಸ್ಥಳದಲ್ಲಿ ನನ್ನ ಬೆರಳನ್ನಿಡುವವರೆಗೆ ಮತ್ತು ಆತನ
ಪಕ್ಕೆಯಲ್ಲಿ ನನ್ನ ಕೈಯನ್ನು ಇಟ್ಟುನೋಡುವವರೆಗೆ ನಾನು
ಅದನ್ನು ನಂಬುವುದಿಲ್ಲ'' ಎಂದು ಹೇಳಿದನು.

26ಒಂದು ವಾರದ ನಂತರ ಶಿಷ್ಯರು ಮನೆಯೊಂದರಲ್ಲಿ
ಒಟ್ಟಾಗಿ ಸೇರಿದ್ದರು. ತೋಮನು ಅವರೊಂದಿಗೆ ಇದ್ದನು.
ಬಾಗಿಲುಗಳನ್ನು ಮುಚ್ಚಲಾಗಿತ್ತು. ಆಗ ಯೇಸು ಬಂದು ಅವರ
ಮಧ್ಯದಲ್ಲಿ ನಿಂತುಕೊಂಡು ಅವರಿಗೆ, ''ಶಾಂತಿಯು
ನಿಮ್ಮೊಂದಿಗಿರಲಿ!'' ಎಂದು ಹೇಳಿದನು.

27ಬಳಿಕ ಯೇಸು ತೋಮನಿಗೆ, ''ನಿನ್ನ ಬೆರಳನ್ನು ಇಲ್ಲಿಡು.
ನನ್ನ ಕೈಗಳನ್ನು ನೋಡು. ನಿನ್ನ ಕೈಯನ್ನು ನನ್ನ ಪಕ್ಕೆಯಲ್ಲಿ ಹಾಕು.
ಸಂಶಯಪಡದೆ ನಂಬುವವನಾಗು'' ಎಂದು ಹೇಳಿದನು.

28ತೋಮನು ಯೇಸುವಿಗೆ, ''ನನ್ನ ಪ್ರಭುವೇ, ನನ್ನ
ದೇವರೇ!'' ಎಂದು ಹೇಳಿದನು.

29ಯೇಸು ತೋಮನಿಗೆ, ''ನೀನು ನನ್ನನ್ನು ನೋಡಿದ್ದರಿಂದ
ನಂಬಿದೆ. ನನ್ನನ್ನು ನೋಡದೆ ನಂಬುವವರು ನಿಜವಾಗಿಯೂ
ಧನ್ಯರು'' ಎಂದು ಹೇಳಿದನು.

### ಯೋಹಾನನು ಈ ಪುಸ್ತಕವನ್ನು ಬರೆದ ಉದ್ದೇಶ

30ಯೇಸು ಇನ್ನೂ ಅನೇಕ ಸೂಚಕ ಕಾರ್ಯಗಳನ್ನು ತನ್ನ
ಶಿಷ್ಯರ ಕಣ್ಮುಂದೆ ಮಾಡಿದನು. ಆ ಅದ್ಭುತಕಾರ್ಯಗಳನ್ನು ಈ
ಪುಸ್ತಕದಲ್ಲಿ ಬರೆದಿಲ್ಲ. 31ಆದರೆ ಆತನೇ ಕ್ರಿಸ್ತನೆಂದೂ ದೇವರ
ಮಗನೆಂದೂ ನೀವು ನಂಬುವಂತೆಯೂ ನಂಬಿ ಆತನ ಹೆಸರಿನ
ಮೂಲಕವಾಗಿ ಜೀವವನ್ನು ಪಡೆದುಕೊಳ್ಳುವಂತೆಯೂ ಇಷ್ಟೆಲ್ಲಾ
ಬರೆದದೆ.

### ಏಳು ಮಂದಿ ಶಿಷ್ಯರಿಗೆ ಯೇಸುವಿನ ದರ್ಶನ

21 ತರುವಾಯ, ಯೇಸು ತನ್ನ ಶಿಷ್ಯರಿಗೆ ತಿಬೇರಿಯ
(ಗಲಿಲೇಯ) ಸರೋವರದ ಬಳಿ ಕಾಣಿಸಿ
ಕೊಂಡನು. ಅದು ಹೀಗೆ ನಡೆಯಿತು: 2ಕೆಲವು ಶಿಷ್ಯರು ಒಟ್ಟಾಗಿ
ಸೇರಿದ್ದರು. ಅವರು ಯಾರೆಂದರೆ, ಸೀಮೋನ್ ಪೇತ್ರ, ದಿದುಮ
ನೆಂಬ ತೋಮ, ಗಲಿಲೇಯಕ್ಕೆ ಸೇರಿದ ಕಾನಾ ಊರಿನವನಾದ
ನತಾನಿಯೇಲ, ಜೆಬೆದಾಯನ ಇಬ್ಬರು ಗಂಡುಮಕ್ಕಳು ಮತು
ಇನ್ನಿಬ್ಬರು ಶಿಷ್ಯರು.

3ಪೇತ್ರನು ಅವರಿಗೆ, ''ನಾನು ಮೀನು ಹಿಡಿಯಲು
ಹೋಗುತ್ತಿದ್ದೇನೆ'' ಎಂದನು.

ಉಳಿದ ಶಿಷ್ಯರು, ‘‘ನಾವೂ ನಿನ್ನೊಂದಿಗೆ ಬರುತ್ತೇವೆ’’
ಎಂದು ಹೇಳಿದರು. ಅಂತೆಯೇ ಶಿಷ್ಯರೆಲ್ಲಾ ಹೊರಟು ದೋಣಿ
ಯನ್ನು ಹತ್ತಿದರು. ಅವರು ರಾತ್ರಿಯೆಲ್ಲಾ ಬಲೆ ಬೀಸಿದರೂ
ಒಂದು ಮೀನೂ ಸಿಗಲಿಲ್ಲ. 4ಅಂದು ಮುಂಜಾನೆಯಾದಾಗ,
ಯೇಸು ತೀರದಲ್ಲಿ ನಿಂತುಕೊಂಡಿದ್ದನು. ಆದರೆ ಆತನೇ ಯೇಸು
ಎಂಬುದು ಶಿಷ್ಯರಿಗೆ ಗೊತ್ತಿರಲಿಲ್ಲ. 5ಆಗ ಆತನು ತನ್ನ ಶಿಷ್ಯರಿಗೆ,
‘‘ಮಕ್ಕಳೇ, ನಿಮಗೆ ಮೀನು ಸಿಕ್ಕಿತೋ?’’ ಎಂದು ಕೇಳಿದನು.
ಶಿಷ್ಯರು, ‘‘ಇಲ್ಲ’’ ಎಂದು ಉತ್ತರ ಕೊಟ್ಟರು.
6ಯೇಸು, ‘‘ನಿಮ್ಮ ದೋಣಿಯ ಬಲ ಭಾಗದಲ್ಲಿರುವ
ನೀರಿನೊಳಗೆ ನಿಮ್ಮ ಬಲೆ ಬೀಸಿರಿ. ಅಲ್ಲಿ ಕೆಲವು ಮೀನುಗಳು
ಸಿಕ್ಕುತ್ತವೆ’’ ಎಂದು ಹೇಳಿದನು. ಶಿಷ್ಯರು ಹಾಗೆಯೇ ಮಾಡಿ
ದರು. ಬಹಳ ಮೀನುಗಳು ಸಿಕ್ಕಿಕೊಂಡದ್ದರಿಂದ ಅವರು
ಬಲೆಯನ್ನು ದೋಣಿಯೊಳಗೆ ಎಳೆದುಕೊಳ್ಳಲಾಗಲಿಲ್ಲ.
7ಯೇಸುವಿನ ಪ್ರೀತಿಯ ಶಿಷ್ಯನು ಪೇತ್ರನಿಗೆ, ‘‘ಆ
ಮನುಷ್ಯನು ಪ್ರಭುವೇ (ಯೇಸು)!’’ ಎಂದು ಹೇಳಿದನು.
ಕೂಡಲೇ ಪೇತ್ರನು ತನ್ನ ಅಂಗಿಯನ್ನು ಹಾಕಿಕೊಂಡು, ನೀರಿಗೆ
ಧುಮುಕಿದನು. (ಪೇತ್ರನು ಮೀನು ಹಿಡಿಯುವುದಕ್ಕಾಗಿ ತನ್ನ
ಅಂಗಿಯನ್ನು ಬಿಚ್ಚಿಟ್ಟಿದ್ದನು.) 8ಉಳಿದ ಶಿಷ್ಯರು ದೋಣಿಯಲ್ಲಿ
ತೀರಕ್ಕೆ ಹೋದರು. ಅವರು ಬಲೆ ತುಂಬ ಮೀನುಗಳನ್ನು ದಡಕ್ಕೆ
ಎಳೆದುಕೊಂಡು ಹೋದರು. ಅವರು ದಡದಿಂದ ಬಹುದೂರ
ದಲ್ಲೇನೂ ಇರಲಿಲ್ಲ. ಕೇವಲ ಮುನ್ನೂರು ಅಡಿಗಳಷ್ಟು ದೂರ
ದಲ್ಲಿದ್ದರು. 9ಶಿಷ್ಯರು ದೋಣಿಯಿಂದ ಇಳಿದು ದಡಕ್ಕೆ
ಹೋದಾಗ, ಬೆಂಕಿಯ ಕೆಂಡಗಳನ್ನು ಕಂಡರು. ಬೆಂಕಿಯ ಮೇಲೆ
ಮೀನುಗಳಿದ್ದವು, ಮತ್ತು ಕೆಲವು ರೊಟ್ಟಿಗಳೂ ಅಲ್ಲಿದ್ದವು.
10ಬಳಿಕ ಯೇಸು, ‘‘ನೀವು ಹಿಡಿದ ಮೀನುಗಳಲ್ಲಿ ಕೆಲವನ್ನು
ತನ್ನಿರಿ’’ ಎಂದು ಹೇಳಿದನು.
11ಸೀಮೋನ್ ಪೇತ್ರನು ದೋಣಿಯೊಳಕ್ಕೆ ಹೋಗಿ ಬಲೆ
ಯನ್ನು ದಡಕ್ಕೆ ಎಳೆದುಕೊಂಡು ಬಂದನು. ಬಲೆಯು ದೊಡ್ಡ
ಮೀನುಗಳಿಂದ ತುಂಬಿತ್ತು. ಅದರಲ್ಲಿ ನೂರೈವತ್ತಮೂರು
ಮೀನುಗಳಿದ್ದವು. ಅವು ಬಹಳ ಭಾರವಾಗಿದ್ದರೂ ಬಲೆಯು
ಹರಿದುಹೋಗಲಿಲ್ಲ. 12ಯೇಸು ಅವರಿಗೆ, ‘‘ಬಂದು ಊಟ
ಮಾಡಿ’’ ಎಂದು ಹೇಳಿದನು. ಶಿಷ್ಯರಲ್ಲಿ ಒಬ್ಬರಾದರೂ, ‘‘ನೀನು
ಯಾರು’’ ಎಂದು ಆತನನ್ನು ಕೇಳಲಿಲ್ಲ. ಆತನು ಪ್ರಭುವೆಂದು
ಅವರಿಗೆ ತಿಳಿದಿತ್ತು. 13ಯೇಸುವು ಸಮೀಪಕ್ಕೆ ಬಂದು ರೊಟ್ಟಿ
ಯನ್ನು ಮತ್ತು ಮೀನುಗಳನ್ನು ತೆಗೆದುಕೊಂಡು ಅವರಿಗೆ
ಕೊಟ್ಟನು. 14ಯೇಸು ಪುನರುತ್ಥಾನ ಹೊಂದಿದ ಮೇಲೆ ತನ್ನ
ಶಿಷ್ಯರಿಗೆ ಕಾಣಿಸಿಕೊಂಡದ್ದು ಇದು ಮೂರನೆಯ ಸಲ.

### ಪೇತ್ರನೊಂದಿಗೆ ಯೇಸುವಿನ ಸಂಭಾಷಣೆ

15ಅವರು ಊಟಮಾಡಿದ ಮೇಲೆ, ಯೇಸು ಸೀಮೋನ್
ಪೇತ್ರನಿಗೆ, ‘‘ಯೋಹಾನನ ಮಗನಾದ ಸೀಮೋನನೇ,
ಇಲ್ಲಿರುವ ಇವರು ನನ್ನನ್ನು ಪ್ರೀತಿಸುವುದಕ್ಕಿಂತಲೂ ಹೆಚ್ಚಾಗಿ
ನೀನು ನನ್ನನ್ನು ಪ್ರೀತಿಸುವಿಯೋ?’’ ಎಂದು ಕೇಳಿದನು.
ಪೇತ್ರನು, ‘‘ಹೌದು ಪ್ರಭುವೇ, ನಾನು ಮಮತೆ ಇಟ್ಟಿ
ದ್ದೇನೆಂಬುದು ನಿನಗೆ ಗೊತ್ತಿದೆ’’ ಎಂದನು. ಯೇಸು ಪೇತ್ರನಿಗೆ,
‘‘ನನ್ನ ಕುರಿಮರಿಗಳನ್ನು* ಮೇಯಿಸು’’ ಎಂದನು.
16ಎರಡನೆ ಸಾರಿ ಯೇಸು ಪೇತ್ರನಿಗೆ, ‘‘ಯೋಹಾನನ
ಮಗನಾದ ಸೀಮೋನನೇ, ನೀನು ನನ್ನನ್ನು ಪ್ರೀತಿಸುವಿಯಾ?’’
ಎಂದು ಕೇಳಿದನು. ಪೇತ್ರನು, ‘‘ಹೌದು, ಪ್ರಭುವೇ, ನಾನು
ಮಮತೆ ಇಟ್ಟಿದ್ದೇನೆಂಬುದು ನಿನಗೆ ಗೊತ್ತಿದೆ’’ ಎಂದನು.
ಯೇಸು ಪೇತ್ರನಿಗೆ, ‘‘ನನ್ನ ಕುರಿಗಳನ್ನು ಕಾಯಿ’’ ಎಂದನು.
17ಯೇಸು ಮೂರನೆ ಸಲ, ‘‘ಯೋಹಾನನ ಮಗನಾದ
ಸೀಮೋನನೇ, ನೀನು ನನ್ನನ್ನು ಪ್ರೀತಿಸುವಿಯಾ?’’ ಎಂದು
ಕೇಳಿದನು. ಯೇಸು, ‘‘ನೀನು ನನ್ನನ್ನು ಪ್ರೀತಿಸುವಿಯಾ?’’
ಎಂದು ಮೂರು ಸಾರಿ ಕೇಳಿದ್ದರಿಂದ ಪೇತ್ರನಿಗೆ ದುಃಖ
ವಾಯಿತು. ಪೇತ್ರನು, ‘‘ಪ್ರಭುವೇ, ನಿನಗೆ ಪ್ರತಿಯೊಂದೂ
ತಿಳಿದಿದೆ. ನಾನು ಮಮತೆ ಇಟ್ಟಿದ್ದೇನೆಂಬುದು ನಿನಗೆ ಗೊತ್ತಿದೆ!’’
ಎಂದನು.
ಯೇಸು ಪೇತ್ರನಿಗೆ, ‘‘ನನ್ನ ಕುರಿಗಳನ್ನು ಮೇಯಿಸು.
18ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ನೀನು ಯೌವನಸ್ಥ
ನಾಗಿದ್ದಾಗ, ನಡುಕಟ್ಟಿಕೊಂಡು ನಿನಗೆ ಇಷ್ಟವಾದ ಕಡೆಗೆಲ್ಲಾ
ಹೋದೆ. ಆದರೆ ನೀನು ಮುದುಕನಾದಾಗ, ನಿನ್ನ ಕೈಗಳನ್ನು
ಚಾಚುವೆ ಮತ್ತು ಬೇರೊಬ್ಬನು ನಿನ್ನ ನಡುಕಟ್ಟಿ ನಿನಗೆ
ಇಷ್ಟವಿಲ್ಲದ ಕಡೆಗೆ ನಿನ್ನನ್ನು ನಡೆಸಿಕೊಂಡು ಹೋಗುವನು’’
ಎಂದು ಹೇಳಿದನು. 19(ದೇವರನ್ನು ಮಹಿಮೆಪಡಿಸುವುದಕ್ಕಾಗಿ
ಪೇತ್ರನು ಯಾವ ರೀತಿ ಸಾಯುತ್ತಾನೆ ಎಂಬುದನ್ನು ಸೂಚಿಸಲು
ಯೇಸು ಹೀಗೆ ಹೇಳಿದನು.) ಬಳಿಕ ಯೇಸು ಪೇತ್ರನಿಗೆ,
‘‘ನನ್ನನ್ನು ಹಿಂಬಾಲಿಸು!’’ ಎಂದನು. 20ಪೇತ್ರನು ಹಿಂತಿರುಗಿ
ನೋಡಿದಾಗ, ಯೇಸುವಿನ ಪ್ರೀತಿಯ ಶಿಷ್ಯನು ತಮ್ಮ ಹಿಂದೆ
ನಡೆದುಕೊಂಡು ಬರುತ್ತಿರುವುದನ್ನು ಕಂಡನು. (ರಾತ್ರಿ
ಭೋಜನದ ಸಮಯದಲ್ಲಿ ಯೇಸುವಿನ ಎದೆಯ ಕಡೆಗೆ ಬಾಗಿ,
‘‘ಪ್ರಭುವೇ, ನಿನಗೆ ದ್ರೋಹ ಮಾಡುವವನು ಯಾರು?’’
ಎಂದು ಕೇಳಿದ ಶಿಷ್ಯನೇ ಇವನು.)
21ಪೇತ್ರನು ತಮ್ಮ ಹಿಂದೆ ಬರುತ್ತಿದ್ದ ಈ ಶಿಷ್ಯನನ್ನು ಕಂಡಾಗ
ಯೇಸುವಿಗೆ, ‘‘ಪ್ರಭುವೇ, ಇವನ ವಿಷಯವೇನು?’’ ಎಂದು
ಕೇಳಿದನು. 22ಯೇಸು, ‘‘ನಾನು ಬರುವ ತನಕ ಅವನು
ಜೀವದಿಂದ ಇರಬೇಕೆಂಬುದು ನನ್ನ ಇಷ್ಟವಾಗಿದ್ದರೆ ಅದರಿಂದ
ನಿನಗೇನು? ನೀನು ನನ್ನನ್ನು ಹಿಂಬಾಲಿಸು!’’ ಎಂದು ಉತ್ತರ
ಕೊಟ್ಟನು.
23ಆದ್ದರಿಂದ ಸಹೋದರರ (ಶಿಷ್ಯರ) ಮಧ್ಯೆ ಒಂದು
ಕಥೆಯೇ ಹರಡಿಕೊಂಡಿತು. ಯೇಸುವಿನ ಪ್ರೀತಿಯ ಈ ಶಿಷ್ಯನು
ಸಾಯುವುದಿಲ್ಲವೆಂದು ಅವರು ಹೇಳುತ್ತಿದ್ದರು. ಆದರೆ ಅವನು
ಸಾಯುವುದಿಲ್ಲವೆಂದು ಯೇಸು ಹೇಳಲಿಲ್ಲ. ‘‘ನಾನು ಬರುವ
ತನಕ ಅವನು ಜೀವದಿಂದ ಇರಬೇಕೆಂಬುದು ನನ್ನ ಇಷ್ಟ
ವಾಗಿದ್ದರೆ ಅದರಿಂದ ನಿನಗೇನು?’’ ಎಂದಷ್ಟೇ ಆತನು
ಹೇಳಿದ್ದನು.
24ಈ ಸಂಗತಿಗಳನ್ನು ಈಗ ಬರೆದಿರುವವನು ಮತ್ತು ಇವುಗಳ
ವಿಷಯವಾಗಿ ಈಗ ಸಾಕ್ಷಿ ಹೇಳಿರುವ ಶಿಷ್ಯನು ಅವನೇ. ಅವನು
ಹೇಳುವುದು ಸತ್ಯವೆಂದು ನಮಗೆ ಗೊತ್ತಿದೆ.
25ಯೇಸು ಇತರ ಅನೇಕ ಕಾರ್ಯಗಳನ್ನು ಮಾಡಿದನು.
ಅವುಗಳಲ್ಲಿ ಪ್ರತಿಯೊಂದನ್ನೂ ಬರೆಯುವುದಾದರೆ, ಬರೆಯ
ಲ್ಪಡುವ ಪುಸ್ತಕಗಳನ್ನು ಇಡೀ ಪ್ರಪಂಚವೇ ಹಿಡಿಸಲಾರದೆಂದು
ನಾನು ನೆನಸುತ್ತೇನೆ.

---

**ಕುರಿಮರಿಗಳನ್ನು ಅಥವಾ ಕುರಿ** ಅಂದರೆ ಯೇಸುವಿನ ಹಿಂಬಾಲಕರು.

# ಅಪೊಸ್ತಲರ ಕಾರ್ಯಗಳು

### ಲೂಕನು ಬರೆದ ಎರಡನೆ ಪುಸ್ತಕ

1 ಪ್ರಿಯ ಥೆಯೊಫಿಲನೇ, ಯೇಸು ಮಾಡಿದ ಕಾರ್ಯಗಳ
ಬಗ್ಗೆ ಮತ್ತು ನೀಡಿದ ಬೋಧನೆಗಳ ಬಗ್ಗೆ ಪ್ರತಿಯೊಂದನ್ನು
ನಾನು ನನ್ನ ಮೊದಲನೆಯ ಪುಸ್ತಕದಲ್ಲಿ ಬರೆದೆನು. 2ನಾನು
ಯೇಸುವಿನ ಇಡೀ ಜೀವಮಾನದ ಬಗ್ಗೆ ಅಂದರೆ ಆತನು ಪರ
ಲೋಕಕ್ಕೆ ಏರಿಹೋಗುವವರೆಗೆ ನಡೆದ ಸಂಗತಿಗಳನ್ನು ಬರೆ
ದೆನು. ಯೇಸು ಪರಲೋಕಕ್ಕೆ ಎತ್ತಲ್ಪಡುವದಕ್ಕಿಂತ ಮೊದಲು,
ತಾನು ಆರಿಸಿಕೊಂಡಿದ್ದ ಅಪೊಸ್ತಲರೊಂದಿಗೆ* ಮಾತಾಡಿ
ದನು; ಅವರು ಮಾಡಬೇಕಾದದ್ದನ್ನು ಪವಿತ್ರಾತ್ಮನ ಸಹಾಯ
ದಿಂದ ಅವರಿಗೆ ತಿಳಿಸಿದನು. 3ಇದು ಆತನ ಮರಣಾನಂತರ
ನಡೆದ ಸಂಗತಿ. ತಾನು ಜೀವಂತವಾಗಿರುವದನ್ನು ಆತನು
ಅಪೊಸ್ತಲರಿಗೆ ತೋರಿಸಿಕೊಂಡನು ಮತ್ತು ಶಕ್ತಿಯುತವಾದ
ಅನೇಕ ಕಾರ್ಯಗಳನ್ನು ಮಾಡುವುದರ ಮೂಲಕ ಅದನ್ನು
ನಿರೂಪಿಸಿದನು. ಯೇಸು ಜೀವಂತವಾಗಿ ಎದ್ದುಬಂದ ನಂತರದ
ನಲವತ್ತು ದಿನಗಳ ಅವಧಿಯಲ್ಲಿ ಅಪೊಸ್ತಲರು ಆತನನ್ನು
ಅನೇಕ ಸಲ ನೋಡಿದರು. ಯೇಸು ದೇವರ ರಾಜ್ಯದ ಕುರಿತು
ಅಪೊಸ್ತಲರೊಂದಿಗೆ ಮಾತಾಡಿದನು. 4ಒಮ್ಮೆ, ಯೇಸು ಅವ
ರೊಂದಿಗೆ ಊಟಮಾಡುತ್ತಿದ್ದಾಗ, ಜೆರುಸಲೇಮನ್ನು ಬಿಟ್ಟು
ಹೋಗಬಾರದೆಂದು ಅವರಿಗೆ ಹೇಳಿದನು. ‘‘ತಂದೆಯು ನಿಮ
ಗೊಂದು ವಾಗ್ದಾನವನ್ನು ಮಾಡಿದ್ದಾನೆ. ನಾನು ಮೊದಲೇ ಅದರ
ಬಗ್ಗೆ ನಿಮಗೆ ತಿಳಿಸಿದ್ದೇನೆ. ಈ ವಾಗ್ದಾನವನ್ನು ಸ್ವೀಕರಿಸಿಕೊಳ್ಳಲು
ಜೆರುಸಲೇಮಿನಲ್ಲಿ ಕಾದುಕೊಂಡಿರಿ. 5ಯೋಹಾನನು ಜನರಿಗೆ
ನೀರಿನಲ್ಲಿ ದೀಕ್ಷಾಸ್ನಾನ ಮಾಡಿಸಿದನು, ಆದರೆ ಇನ್ನು ಕೆಲವೇ
ದಿನಗಳಲ್ಲಿ ನಿಮಗೆ ಪವಿತ್ರಾತ್ಮನಲ್ಲಿ ದೀಕ್ಷಾಸ್ನಾನವಾಗುವುದು’’
ಎಂದು ಹೇಳಿದನು.

### ಪರಲೋಕಾರೋಹಣ

6ಅಪೊಸ್ತಲರು ಒಟ್ಟಾಗಿ ಸೇರಿದ್ದಾಗ, ಯೇಸುವಿಗೆ,
‘‘ಪ್ರಭುವೇ, ನೀನು ಯೆಹೂದ್ಯರಿಗೆ ಮತ್ತೆ ಅವರ ರಾಜ್ಯವನ್ನು
ಕೊಡುವಂಥದ್ದು ಈ ಕಾಲದಲ್ಲೋ?’’ ಎಂದು ಕೇಳಿದರು.
7ಯೇಸು ಅವರಿಗೆ, ‘‘ದಿನಗಳನ್ನು ಮತ್ತು ಕಾಲಗಳನ್ನು
ನಿರ್ಧರಿಸುವ ಅಧಿಕಾರವಿರುವುದು ತಂದೆಯೊಬ್ಬನಿಗಷ್ಟೇ.
ನೀವು ಅವುಗಳನ್ನು ತಿಳಿದುಕೊಳ್ಳಲಾಗುವುದಿಲ್ಲ. 8ಆದರೆ
ಪವಿತ್ರಾತ್ಮನು* ನಿಮ್ಮ ಬಳಿಗೆ ಬಂದಾಗ ನೀವು ಬಲಹೊಂದಿ
ಜೆರುಸಲೇಮಿನಲ್ಲಿಯೂ ಇಡೀ ಜುದೇಯದಲ್ಲಿಯೂ
ಸಮಾರ್ಯದಲ್ಲಿಯೂ ಮತ್ತು ಭೂಲೋಕದ ಕಟ್ಟಕಡೆಯ
ವರೆಗೂ ನನಗೆ ಸಾಕ್ಷಿಗಳಾಗಿರುವಿರಿ’’ ಎಂದನು.
9ಯೇಸು ಈ ಸಂಗತಿಗಳನ್ನು ಅಪೊಸ್ತಲರಿಗೆ ಹೇಳಿದ ಮೇಲೆ
ಅಪೊಸ್ತಲರು ನೋಡುತ್ತಿರುವಾಗಲೇ ಆಕಾಶಕ್ಕೆ ಎತ್ತಲ್ಪಟ್ಟನು.
ಮೋಡವು ಆತನನ್ನು ಕವಿದುಕೊಂಡದ್ದರಿಂದ ಅವರು ಆತನನ್ನು
ಕಾಣಲಾಗಲಿಲ್ಲ. 10ಯೇಸು ಹೋಗುತ್ತಿರಲು ಅಪೊಸ್ತಲರು
ಆಕಾಶವನ್ನೇ ನೋಡುತ್ತಾ ನಿಂತಿದ್ದರು. ಆಗ, ಬಿಳುಪಾದ ಬಟ್ಟೆ
ಗಳನ್ನು ಧರಿಸಿಕೊಂಡಿದ್ದ ಇಬ್ಬರು ಪುರುಷರು (ದೇವದೂತರು)
ಇದ್ದಕ್ಕಿದ್ದಂತೆ ಅವರ ಪಕ್ಕದಲ್ಲಿ ನಿಂತುಕೊಂಡು, 11‘‘ಗಲಿಲಾಯ
ದವರೇ, ಆಕಾಶವನ್ನೇ ನೋಡುತ್ತಾ ಏಕೆ ನಿಂತುಕೊಂಡಿದ್ದೀರಿ?
ಯೇಸು ನಿಮ್ಮ ಕಣ್ಣೆದುರಿನಲ್ಲಿ ಪರಲೋಕಕ್ಕೆ ಹೇಗೆ ಏರಿ
ಹೋದನೋ ಅದೇ ರೀತಿಯಲ್ಲಿ ಹಿಂತಿರುಗಿ ಬರುತ್ತಾನೆ’’
ಎಂದು ಹೇಳಿದರು.

### ಹೊಸ ಅಪೊಸ್ತಲನೊಬ್ಬನ ಆಯ್ಕೆ

12ಬಳಿಕ ಅಪೊಸ್ತಲರು ಆಲಿವ್ ಮರಗಳ ಗುಡ್ಡದಿಂದ
ಜೆರುಸಲೇಮಿಗೆ ಹಿಂತಿರುಗಿಹೋದರು. (ಈ ಗುಡ್ಡಕ್ಕೂ ಜೆರುಸ
ಲೇಮಿಗೂ ಸುಮಾರು ಅರ್ಧ ಮೈಲಿ ಅಂತರವಿದೆ.) 13ಅಪೊಸ್ತ
ಲರು ಪಟ್ಟಣವನ್ನು ಪ್ರವೇಶಿಸಿ ತಾವು ವಾಸವಾಗಿದ್ದ ಕೋಣೆಗೆ
ಹೋದರು. ಅದು ಮೇಲ್ಮಾಳಿಗೆಯಲ್ಲಿತ್ತು. ಆ ಅಪೊಸ್ತಲರು
ಯಾರಾರೆಂದರೆ: ಪೇತ್ರ, ಯೋಹಾನ, ಯಾಕೋಬ,
ಅಂದ್ರೆಯ, ಫಿಲಿಪ್ಪ, ತೋಮ, ಬಾರ್ತೊಲೊಮಾಯ,
ಮತ್ತಾಯ, ಯಾಕೋಬ (ಅಲ್ಫಾಯನ ಮಗ), ದೇಶಾಭಿಮಾನಿ
ಯಾದ ಸಿಮೋನ ಮತ್ತು ಯೂದ (ಯಾಕೋಬನ ಮಗ).
14ಅಪೊಸ್ತಲರೆಲ್ಲರೂ ಒಟ್ಟಾಗಿ ಸೇರಿದ್ದರು. ಅವರು
ಒಂದೇ ಉದ್ದೇಶದಿಂದ ಎಡಬಿಡದೆ ಪ್ರಾರ್ಥಿಸುತ್ತಿದ್ದರು. ಕೆಲವು
ಸ್ತ್ರೀಯರೂ ಯೇಸುವಿನ ತಾಯಿ ಮರಿಯಳೂ ಆತನ ಸಹೋದ
ರರೂ ಅಪೊಸ್ತಲರ ಸಂಗಡವಿದ್ದರು.
15ಕೆಲವು ದಿನಗಳಾದ ಮೇಲೆ ವಿಶ್ವಾಸಿಗಳು ಸಭೆ ಸೇರಿದ್ದರು.
(ಅಲ್ಲಿ ಸುಮಾರು ನೂರಿಪ್ಪತ್ತು ಮಂದಿ ಇದ್ದರು.) ಪೇತ್ರನು
ಎದ್ದುನಿಂತುಕೊಂಡು ಇಂತೆಂದನು: 16-17‘‘ಸಹೋದರರೇ,
ಪವಿತ್ರಾತ್ಮನು ದಾವೀದನ ಮೂಲಕವಾಗಿ ಪವಿತ್ರ ಗ್ರಂಥದಲ್ಲಿ*
ಮುಂತಿಳಿಸಿದ್ದ ಸಂಗತಿ ನೆರವೇರಬೇಕಿತ್ತು. ನಮ್ಮ ಸ್ವಂತ ಗುಂಪಿ
ನವರಲ್ಲಿ ಒಬ್ಬನಾದ ಯೂದನ ಬಗ್ಗೆ ದಾವೀದನು ಹೇಳಿದ್ದಾನೆ.
ಯೂದನು ನಮ್ಮೊಂದಿಗೆ ಸೇವೆ ಮಾಡಿದನು. ಯೇಸುವನ್ನು
ಬಂಧಿಸುವವರಿಗೆ ಯೂದನು ಮಾರ್ಗದರ್ಶಕನಾಗುತ್ತಾನೆಂದು
ಪವಿತ್ರಾತ್ಮನು ತಿಳಿಸಿದ್ದನು.’’

---

**ಅಪೊಸ್ತಲರು** ವಿಶೇಷ ಸಹಾಯಕರಾಗಿ ಯೇಸುವಿನಿಂದ ಆರಿಸಲ್ಪಟ್ಟವರು.

**ಪವಿತ್ರಾತ್ಮನು** ಅಂದರೆ ದೇವರಾತ್ಮ, ಕ್ರಿಸ್ತನ ಆತ್ಮ ಮತ್ತು ಸಂತೈಸುವವನು. ದೇವರೊಡನೆ ಮತ್ತು ಕ್ರಿಸ್ತನೊಡನೆ ಸೇರಿ ಆತನು (ದೇವರ) ಕಾರ್ಯವನ್ನು ಲೋಕದ ಜನರ ಮಧ್ಯದಲ್ಲಿ ಮಾಡುವನು.

**ಪವಿತ್ರ ಗ್ರಂಥ** ಪವಿತ್ರ ಬರಹಗಳು - ಹಳೆ ಒಡಂಬಡಿಕೆ.

[18](ಈ ಕಾರ್ಯ ಮಾಡುವುದಕ್ಕಾಗಿ ಯೂದನಿಗೆ ಹಣ
ಕೊಡಲಾಗಿತ್ತು. ಆ ಹಣದಿಂದ ಒಂದು ಹೊಲವನ್ನು ಅವನಿಗಾಗಿ
ಕೊಂಡುಕೊಳ್ಳಲಾಯಿತು. ಆದರೆ ಯೂದನು ತಲೆಕೆಳಗಾಗಿ
ಬಿದ್ದಾಗ ಅವನ ಹೊಟ್ಟೆ ಒಡೆದುಹೋಯಿತು. ಅವನ ಕರುಳೆಲ್ಲಾ
ಹೊರಗೆ ಬಂದವು. [19]ಇದರ ಬಗ್ಗೆ ಜೆರುಸಲೇಮಿನ ಜನ
ರೆಲ್ಲರಿಗೂ ತಿಳಿಯಿತು. ಆದಕಾರಣವೇ ಅವರು ಆ ಹೊಲಕ್ಕೆ
ಅಕೆಲ್ದಮಾ ಎಂದು ಹೆಸರಿಟ್ಟರು. ಅವರ ಭಾಷೆಯಲ್ಲಿ ಅಕೆಲ್ದಮಾ
ಅಂದರೆ 'ರಕ್ತದ ಹೊಲ' ಎಂದರ್ಥ.)

[20] 'ಅವನ ಮನೆ ಹಾಳಾಗಲಿ! ಅಲ್ಲಿ ಯಾರೂ ವಾಸಿಸ
ದಂತಾಗಲಿ! *ಕೀರ್ತನೆ 69:25*

ಎಂದು ಕೀರ್ತನೆಗಳ ಪುಸ್ತಕದಲ್ಲಿ ಯೂದನ ಬಗ್ಗೆ ಬರೆದಿದೆ.

ಅಲ್ಲದೆ 'ಬೇರೊಬ್ಬನು ಅವನ ಕೆಲಸವನ್ನು ಪಡೆದು
ಕೊಳ್ಳಲಿ' *ಕೀರ್ತನೆ 109:8*

ಎಂದು ಸಹ ಬರೆದಿದೆ.
[21-22]ಆದ್ದರಿಂದ ಬೇರೊಬ್ಬನು ನಮ್ಮೊಂದಿಗೆ ಸೇರಿ,
ಯೇಸುವಿನ ಪುನರುತ್ಥಾನಕ್ಕೆ ಸಾಕ್ಷಿಯಾಗಿರಬೇಕು. ಪ್ರಭುವಾದ
ಯೇಸು ನಮ್ಮಲ್ಲಿ ಹೋಗುತ್ತಾ ಬರುತ್ತಾ ಇದ್ದ ಕಾಲವೆಲ್ಲಾ
ಅವನು ನಮ್ಮ ಗುಂಪಿನಲ್ಲಿದ್ದವರಲ್ಲಿ ಒಬ್ಬನಾಗಿರಬೇಕು.
ಯೋಹಾನನು ದೀಕ್ಷಾಸ್ನಾನ ಕೊಡಲು ಆರಂಭ ಮಾಡಿದ ದಿನದ
ಮೊದಲುಗೊಂಡು ಯೇಸುವು ನಮ್ಮ ಬಳಿಯಿಂದ ಪರ
ಲೋಕಕ್ಕೆ ಎತ್ತಲ್ಪಟ್ಟ ದಿನದವರೆಗೂ ಅವನು ನಮ್ಮೊಂದಿಗಿದ್ದವ
ನಾಗಿರಬೇಕು.''
[23]ಅಪೊಸ್ತಲರು ಇಬ್ಬರನ್ನು ಸಭೆಯ ಮುಂದೆ ನಿಲ್ಲಿಸಿದರು.
ಒಬ್ಬನು ಬಾರ್ಸಬನೆಂಬ ಯೋಸೇಫ. ಇವನನ್ನು ಯೂಸ್ತ
ನೆಂದೂ ಕರೆಯುತ್ತಿದ್ದರು. ಮತ್ತೊಬ್ಬನು ಮತ್ತೀಯ.
[24-25]ಅಪೊಸ್ತಲರು ಹೀಗೆ ಪ್ರಾರ್ಥಿಸಿದರು: ''ಪ್ರಭುವೇ, ನೀನು
ಎಲ್ಲಾ ಜನರ ಮನಸ್ಸುಗಳನ್ನು ತಿಳಿದಿರುವೆ. ಈ ಕೆಲಸವನ್ನು
ಮಾಡುವುದಕ್ಕಾಗಿ ಈ ಇಬ್ಬರಲ್ಲಿ ನೀನು ಯಾರನ್ನು ಆರಿಸಿ
ಕೊಂಡಿರುವೆ ಎಂಬುದನ್ನು ನಮಗೆ ತೋರಿಸು. ಯೂದನು ಈ
ಕೆಲಸಕ್ಕೆ ವಿಮುಖನಾಗಿ ತಾನು ಸೇರಬೇಕಿದ್ದಲ್ಲಿಗೆ ಹೊರಟು
ಹೋದನು. ಪ್ರಭುವೇ, ಅವನ ಸ್ಥಳದಲ್ಲಿ ಅಪೊಸ್ತಲನಾಗಿ
ಯಾರು ನೇಮಕಗೊಳ್ಳಬೇಕೆಂಬುದನ್ನು ನಮಗೆ ತೋರಿಸು!''
[26] ಬಳಿಕ ಅಪೊಸ್ತಲರು ಅವರಿಬ್ಬರಲ್ಲಿ ಒಬ್ಬನನ್ನು ಆರಿಸಿ
ಕೂಳ್ಳಲು ಚೀಟಿಹಾಕಿದರು. ಚೀಟಿ ಮತ್ತೀಯನಿಗೆ ಬಂದದ್ದ
ರಿಂದ ಹನ್ನೊಂದು ಮಂದಿ ಯೊಂದಿಗೆ ಅವನೂ ಅಪೊಸ್ತಲ
ನಾದನು.

## ಪವಿತ್ರಾತ್ಮನ ಆಗಮನ

2 ಪಂಚಶತ್ತಮ ಹಬ್ಬದ* ದಿನ ಬಂದಾಗ ಅವರೆಲ್ಲರು
ಒಂದು ಸ್ಥಳದಲ್ಲಿ ಒಟ್ಟಾಗಿ ಸೇರಿದ್ದರು. ಆಗ, ಆಕಾಶದಿಂದ
ಒಂದು ಶಬ್ದ ಇದ್ದಕ್ಕಿದ್ದಂತೆ ಬಂದಿತು. ಬಿರುಗಾಳಿ ಬೀಸು
ತ್ತಿದೆಯೋ ಎಂಬಂತಿತ್ತು ಆ ಶಬ್ದ. ಅವರು ಕುಳಿತುಕೊಂಡಿದ್ದ
ಮನೆಯಲ್ಲೆಲ್ಲಾ ಆ ಶಬ್ದ ತುಂಬಿಕೊಂಡಿತು. [3]ಬೆಂಕಿಯ ಜ್ವಾಲೆ
ಗಳಂತಿದ್ದ ಏನನ್ನೊ ಅವರು ಕಂಡರು. ಜ್ವಾಲೆಗಳು ವಿಂಗಡವಾಗಿ
ಅಲ್ಲಿದ್ದ ಪ್ರತಿಯೊಬ್ಬ ವ್ಯಕ್ತಿಯ ಮೇಲೆ ನೆಲೆಸಿದವು. [4]ಅವ
ರೆಲ್ಲರೂ ಪವಿತ್ರಾತ್ಮಭರಿತರಾದರು ಮತ್ತು ವಿವಿಧ ಭಾಷೆಗಳಲ್ಲಿ
ಮಾತಾಡತೊಡಗಿದರು. ಪವಿತ್ರಾತ್ಮನೇ ಅವರಿಗೆ ಆ ಶಕ್ತಿಯನ್ನು
ಕೊಟ್ಟನು.
[5]ಬಹು ಧಾರ್ಮಿಕರಾದ ಅನೇಕ ಯೆಹೂದ್ಯರು ಆ ಸಮಯ
ದಲ್ಲಿ ಜೆರುಸಲೇಮಿನಲ್ಲಿದ್ದರು. ಇವರಲ್ಲಿ ಪ್ರಪಂಚದ ಪ್ರತಿ
ಯೊಂದು ದೇಶದಿಂದ ಬಂದ ಜನರಿದ್ದರು. [6]ಈ ಶಬ್ದವನ್ನು ಕೇಳಿ
ಈ ಜನರ ಒಂದು ದೊಡ್ಡ ಸಮೂಹವೇ ಅಲ್ಲಿಗೆ ಬಂದಿತು.
ಅಪೊಸ್ತಲರು ಮಾತಾಡುತ್ತಿರುವುದು ಪ್ರತಿಯೊಬ್ಬರಿಗೂ ಅವರ
ವರ ಸ್ವಂತ ಭಾಷೆಗಳಲ್ಲಿ ಕೇಳಿಸುತ್ತಿರುವುದನ್ನು ಕಂಡು ಅವರಿಗೆ
ಆಶ್ಚರ್ಯವಾಯಿತು. [7]ಇದನ್ನು ನೋಡಿದ ಯೆಹೂದ್ಯರೆಲ್ಲರೂ
ವಿಸ್ಮಯಗೊಂಡರು. ಹೀಗೆ ಮಾಡಲು ಅಪೊಸ್ತಲರಿಗೆ ಹೇಗೆ
ಸಾಧ್ಯವಾಯಿತೆಂದು ಅವರಿಗೆ ಅರ್ಥವಾಗಲಿಲ್ಲ. ಅವರು,
''ಮಾತಾಡುತ್ತಿರುವ ಈ ಜನರು (ಅಪೊಸ್ತಲರು) ಗಲಿಲಾಯ
ದವರು!* [8]ಆದರೆ ಇವರು ನಮ್ಮ ಸ್ವಂತ ಭಾಷೆಗಳಲ್ಲಿ ಮಾತಾಡು
ತ್ತಿರುವಂತೆ ಕೇಳಿಸುತ್ತಿದೆ. ಇದು ಹೇಗೆ ಸಾಧ್ಯ? ನಾವು ಬೇರೆ
ಬೇರೆ ಸ್ಥಳಗಳವರು. [9]ನಮ್ಮಲ್ಲಿ ಪಾರ್ಥಿಯರು, ಮೀಡಿಯರು,
ಎಲಾಮಿನವರು, ಮೆಸೊಪೊಟೇಮಿನವರು, ಜುದೇಯ
ದವರು, ಕಪ್ಪದೋಸಿಯವರು, ಪೊಂತದವರು, ಏಷ್ಯಾದ
ವರು,* [10]ಫ್ರಿಜಿಯದವರು, ಪಾಂಫಿಲಿಯದವರು, ಈಜಿಪ್ಟಿ
ನವರು ಮತ್ತು ಸಿರೇನಿನ ಬಳಿಯಲ್ಲಿರುವ ಲಿಬಿಯ ಪ್ರಾಂತ್ಯ
ದವರು, ರೋಮ್‌ನವರು, [11]ಕ್ರೇಟ್‌ನವರು ಮತ್ತು ಅರೇಬಿ
ಯವರು ಇದ್ದಾರೆ. ನಮ್ಮಲ್ಲಿರುವ ಕೆಲವು ಜನರು ಹುಟ್ಟು
ಯೆಹೂದ್ಯರು. ಉಳಿದವರು ಮತಾಂತರ ಹೊಂದಿದವರು.
ನಾವು ಬೇರೆಬೇರೆ ದೇಶಗಳವರು. ಆದರೆ ಈ ಜನರು ಮಾತಾಡು
ತ್ತಿರುವುದು ನಮ್ಮ ಸ್ವಂತ ಭಾಷೆಗಳಲ್ಲಿ ನಮಗೆ ಕೇಳಿಸುತ್ತಿದೆ!
ಅವರು ದೇವರ ಬಗ್ಗೆ ಹೇಳುತ್ತಿರುವ ಮಹಾಸಂಗತಿಗಳು ನಮ
ಗೆಲ್ಲರಿಗೂ ಅರ್ಥವಾಗುತ್ತಿವೆ '' ಎಂದು ಹೇಳಿದರು. [12]ಜನ
ರೆಲ್ಲರೂ ವಿಸ್ಮಯಗೊಂಡರು ಮತ್ತು ಗಲಿಬಿಲಿಯಾದರು.
ಅವರು, ''ಏನು ನಡೆಯುತ್ತಿದೆ'' ಎಂದು ಒಬ್ಬರನ್ನೊಬ್ಬರು ಕೇಳ
ತೊಡಗಿದರು. [13]ಕೆಲವರು ಅಪೊಸ್ತಲರನ್ನು ನೋಡಿ ನಗುತ್ತಾ
''ಇವರು ಅತಿಯಾಗಿ ದ್ರಾಕ್ಷಾರಸ ಕುಡಿದು ಮತ್ತರಾಗಿದ್ದಾರೆ''
ಎಂದು ಹಾಸ್ಯಮಾಡಿದರು.

## ಪೇತ್ರನ ಪ್ರಸಂಗ

[14]ಬಳಿಕ ಪೇತ್ರನು ಉಳಿದ ಹನ್ನೊಂದು ಮಂದಿ
ಅಪೊಸ್ತಲರೊಂದಿಗೆ ಎದ್ದುನಿಂತುಕೊಂಡನು. ಎಲ್ಲಾ ಜನರಿಗೆ
ಕೇಳುವಂತೆ ಅವನು ಗಟ್ಟಿಯಾಗಿ ಇಂತೆಂದನು: ''ಯೆಹೂದ್ಯರೇ,
ಜೆರುಸಲೇಮಿನಲ್ಲಿ ವಾಸವಾಗಿರುವ ಜನರೇ, ನನಗೆ ಕಿವಿ
ಗೊಡಿರಿ. ನೀವು ತಿಳಿದುಕೊಳ್ಳಬೇಕಾದ ಸಂಗತಿಯನ್ನು ನಾನು
ನಿಮಗೆ ಹೇಳುತ್ತೇನೆ. [15]ನೀವು ಯೋಚಿಸಿಕೊಂಡಿರುವಂತೆ ಈ

---

**ಪಂಚಶತ್ತಮ ಹಬ್ಬ** ಯೆಹೂದ್ಯರ ಹಬ್ಬವಿದು. ಇದು ಗೋಧಿಯ ಸುಗ್ಗಿ ಹಬ್ಬ.

**ಗಲಿಲಾಯದವರು** ಇವರು ತಮ್ಮ ಸ್ವಂತ ಭಾಷೆಯಲ್ಲಿ ಮಾತ್ರ ಮಾತಾಡಬಲ್ಲರೆಂಬುದು ಜನರ ಭಾವನೆಯಾಗಿತ್ತು.

**ಏಷ್ಯಾ** ಏಷ್ಯಾ ಮೈನರಿನ ಪಶ್ಚಿಮ ಭಾಗ.

ಜನರು ಕುಡಿದು ಮತ್ತರಾದವರಲ್ಲ. ಈಗ ಮುಂಜಾನೆ ಒಂಭತ್ತು ಗಂಟೆಯಷ್ಟೇ!
16 ಆದರೆ ಈ ಹೊತ್ತು ಇಲ್ಲಿ ನಡೆಯುತ್ತಿರುವ ಸಂಗತಿಗಳ ಬಗ್ಗೆ ಪ್ರವಾದಿಯಾದ ಯೋವೇಲನು ಹೀಗೆ ಬರೆದಿದ್ದಾನೆ:

17 ‘ದೇವರು ಇಂತೆನ್ನುತ್ತಾನೆ: ಕೊನೆಯ ದಿನಗಳಲ್ಲಿ, ನಾನು ನನ್ನ ಆತ್ಮವನ್ನು ಎಲ್ಲಾ ಜನರಿಗೋಸ್ಕರ ಸುರಿಸುವೆನು. ನಿಮ್ಮ ಗಂಡುಮಕ್ಕಳು, ಹೆಣ್ಣು ಮಕ್ಕಳು ಪ್ರವಾದಿಸುವರು. ನಿಮ್ಮ ಯುವಜನರು ದರ್ಶನಗಳನ್ನು ಕಾಣುವರು. ನಿಮ್ಮ ವಯೋ ವೃದ್ಧರು ವಿಶೇಷ ಕನಸುಗಳನ್ನು ಕಾಣುವರು.
18 ಆ ಸಮಯದಲ್ಲಿ ನಾನು ನನ್ನ ಆತ್ಮವನ್ನು ನನ್ನ ದಾಸದಾಸಿಯರ ಮೇಲೆ ಸುರಿಸುವೆನು. ಆಗ ಅವರು ಪ್ರವಾದಿಸುವರು.
19 ನಾನು ಆಕಾಶದಲ್ಲಿ ಅದ್ಭುತ ಕಾರ್ಯಗಳನ್ನು ತೋರಿಸುವೆನು. ಭೂಮಿಯ ಮೇಲೆ ಸೂಚಕ ಕಾರ್ಯಗಳನ್ನು ಮಾಡುವೆನು. ರಕ್ತ, ಬೆಂಕಿ ಮತ್ತು ಕಪ್ಪೊಗೆಗಳು ಅಲ್ಲಿರುವವು.
20 ಸೂರ್ಯನು ಕತ್ತಲಾಗುವನು, ಚಂದ್ರನು ರಕ್ತ ದಂತೆ ಕೆಂಪಾಗುವನು, ಆಗ ಪ್ರಭುವಿನ ಗಂಭೀರ ವಾದ ಮಹಾದಿನವು ಬರುವುದು;
21 ಪ್ರಭುವಿನ ಹೆಸರನ್ನು ಹೇಳಿಕೊಳ್ಳುವವರಿಗೆಲ್ಲ ರಕ್ಷಣೆ ಆಗುವುದು.’

*ಯೋವೇಲ 2:28-32*

22 ‘‘ಯೆಹೂದ್ಯರೇ, ಈ ಮಾತುಗಳನ್ನು ಕೇಳಿರಿ: ನಜರೇತಿನ ಯೇಸು ಬಹು ವಿಶೇಷವಾದ ವ್ಯಕ್ತಿ. ದೇವರು ತಾನು ಯೇಸುವಿನ ಮೂಲಕ ಮಾಡಿದ ಶಕ್ತಿಯುತವಾದ ಮತ್ತು ಅದ್ಭುತವಾದ ಕಾರ್ಯಗಳ ಮೂಲಕ ಇದನ್ನು ಸ್ಪಷ್ಟವಾಗಿ ನಿರೂಪಿಸಿದ್ದಾನೆ. ಈ ಸಂಗತಿಗಳನ್ನು ನೀವೆಲ್ಲರೂ ನೋಡಿದಿರಿ. ಆದ್ದರಿಂದ ಇದು ಸತ್ಯವೆಂದು ನಿಮಗೆ ಗೊತ್ತಿದೆ.
23 ಯೇಸುವನ್ನು ನಿಮಗೆ ಒಪ್ಪಿಸ ಲಾಯಿತು. ನೀವು ಕೆಟ್ಟಜನರ ಸಹಾಯದಿಂದ ಆತನನ್ನು ಶಿಲುಬೆ ಗೇರಿಸಿದಿರಿ. ಆದರೆ ಇವುಗಳೆಲ್ಲಾ ಸಂಭವಿಸುತ್ತವೆಯೆಂದು ದೇವರಿಗೆ ಗೊತ್ತಿತ್ತು. ಇದು ದೇವರ ಯೋಜನೆ. ದೇವರು ಬಹು ಕಾಲದ ಹಿಂದೆಯೇ ಈ ಯೋಜನೆಯನ್ನು ಮಾಡಿದನು.
24 ಯೇಸು ಮರಣವೇದನೆಯನ್ನು ಅನುಭವಿಸಿದನು. ಆದರೆ ದೇವರು ಆತನನ್ನು ಬಿಡಿಸಿದನು. ದೇವರು ಯೇಸುವನ್ನು ಸತ್ತವ ರೊಳಗಿಂದ ಜೀವಂತವಾಗಿ ಎಬ್ಬಿಸಿದನು. ಮರಣವು ಯೇಸು ವನ್ನು ಹಿಡಿದುಕೊಳ್ಳಲಾಗಲಿಲ್ಲ.
25 ಯೇಸುವಿನ ಬಗ್ಗೆ ದಾವೀದನು ಹೀಗೆ ಹೇಳಿದ್ದಾನೆ:

‘ಪ್ರಭುವು ಯಾವಾಗಲೂ ನನ್ನ ಮುಂದೆ ಇರುವು ದನ್ನು ನಾನು ನೋಡುತ್ತಿದ್ದೆನು; ನನ್ನನ್ನು ಸುರಕ್ಷಿತವಾಗಿಡಲು ಆತನು ನನ್ನ ಬಲಗಡೆ ಯಲ್ಲಿದ್ದಾನೆ.
26 ಆದ್ದರಿಂದ ನನ್ನ ಹೃದಯವು ಹರ್ಷಿಸುತ್ತದೆ. ನನ್ನ ಬಾಯಿ ಆನಂದದಿಂದ ಮಾತಾಡುತ್ತದೆ. ಹೌದು, ನನ್ನ ದೇಹವು ಸಹ ನಿರೀಕ್ಷೆಯಿಂದ ಜೀವಿಸುವುದು;
27 ಯಾಕೆಂದರೆ ನೀನು ನನ್ನ ಜೀವಾತ್ಮವನ್ನು ಪಾತಾಳದಲ್ಲಿ ತೊರೆದುಬಿಡುವುದಿಲ್ಲ. ನಿನ್ನ ಪರಿಶುದ್ಧನ ದೇಹವು ಸಮಾಧಿಯಲ್ಲಿ ಕೊಳೆ ಯಲು ನೀನು ಅವಕಾಶ ಕೊಡುವುದಿಲ್ಲ.
28 ಹೇಗೆ ಜೀವಿಸಬೇಕೆಂಬುದನ್ನು ನೀನು ನನಗೆ ಉಪದೇಶಿಸಿದೆ. ನಿನ್ನ ಪ್ರಸನ್ನತೆಯು ನನ್ನಲ್ಲಿ ಮಹದಾನಂದವನ್ನು ಉಂಟುಮಾಡುವುದು.’

*ಕೀರ್ತನೆ 16:8-11*

29 ‘‘ನನ್ನ ಸಹೋದರರೇ, ನಮ್ಮ ಪಿತೃವಾದ ದಾವೀದನ ಬಗ್ಗೆ ನಾನು ನಿಮಗೆ ನಿಜವಾಗಿಯೂ ಹೇಳಬಲ್ಲೆನು. ಅವನು ಸತ್ತು ಹೋದನು ಮತ್ತು ಅವನಿಗೆ ಸಮಾಧಿಯಾಯಿತು. ಅವನ ಸಮಾಧಿಯು ನಮ್ಮ ಮಧ್ಯದಲ್ಲಿ ಇಂದಿನವರೆಗೂ ಇದೆ.
30 ದಾವೀದನು ಒಬ್ಬ ಪ್ರವಾದಿಯಾಗಿದ್ದನು* ಮತ್ತು ‘ನಿನ್ನ ಕುಟುಂಬದ ಒಬ್ಬನನ್ನು ನಿನ್ನಂತೆಯೇ ರಾಜನನ್ನಾಗಿ ಮಾಡು ವೆನು’ ಎಂದು ದೇವರು ಅವನಿಗೆ ಆಣೆಯಿಟ್ಟು ವಾಗ್ದಾನ ಮಾಡಿದ್ದು ಅವನಿಗೆ ಗೊತ್ತಿತ್ತು.
31 ಅದು ನೆರವೇರುವುದಕ್ಕಿಂತ ಮೊದಲೇ ದಾವೀದನಿಗೆ ತಿಳಿದಿತ್ತು. ಆದಕಾರಣ ದಾವೀದನು ಪುನರುತ್ಥಾನ ಹೊಂದುವ ಕ್ರಿಸ್ತನ ಬಗ್ಗೆ,

‘ಅವನು ಪಾತಾಳದಲ್ಲಿ ಬಿಡಲ್ಪಡಲಿಲ್ಲ. ಅವನ ದೇಹವು ಸಮಾಧಿಯಲ್ಲಿ ಕೊಳೆಯಲಿಲ್ಲ’ ಎಂದಿ ದ್ದಾನೆ.

32 ಆದ್ದರಿಂದ ದೇವರು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದ್ದು ಯೇಸುವನ್ನೇ ಹೊರತು ದಾವೀದನನ್ನಲ್ಲ! ಇದಕ್ಕೆ ನಾವೆಲ್ಲರೂ ಸಾಕ್ಷಿಗಳಾಗಿದ್ದೇವೆ. ನಾವು ಆತನನ್ನು ಕಂಡೆವು!
33 ಯೇಸು ಪರಲೋಕಕ್ಕೆ ಎತ್ತಲ್ಪಟ್ಟನು. ಈಗ ಯೇಸು ದೇವ ರೊಂದಿಗಿದ್ದಾನೆ, ದೇವರ ಬಲಗಡೆಯಲ್ಲಿದ್ದಾನೆ. ಈಗ ತಂದೆಯು (ದೇವರು) ಪವಿತ್ರಾತ್ಮನನ್ನು ಯೇಸುವಿಗೆ ಕೊಟ್ಟಿ ದ್ದಾನೆ. ಪವಿತ್ರಾತ್ಮನನ್ನು ಕೊಡುವುದಾಗಿ ದೇವರು ವಾಗ್ದಾನ ಮಾಡಿದ್ದನು. ಆದ್ದರಿಂದ ಯೇಸು ಈಗ ಆ ಆತ್ಮನನ್ನು ಸುರಿಸಿ ದ್ದಾನೆ. ನೀವು ನೋಡುತ್ತಿರುವುದು ಮತ್ತು ಕೇಳುತ್ತಿರುವುದು ಇದನ್ನೇ.
34-35 ಪರಲೋಕಕ್ಕೆ ಎತ್ತಲ್ಪಟ್ಟವನು ದಾವೀದನಲ್ಲ, ಯೇಸುವೇ. ದಾವೀದನೇ ಅದರ ಬಗ್ಗೆ ಹೇಳುತ್ತಾ,

‘ಪ್ರಭುವು (ದೇವರು) ನನ್ನ ಪ್ರಭುವಿಗೆ, ನಾನು ನಿನ್ನ ಶತ್ರುಗಳನ್ನು ನಿನ್ನ ಪಾದಗಳಿಗೆ ಪೀಠವಾಗಿ ಮಾಡುವತನಕ ನನ್ನ ಬಲಗಡೆಯಲ್ಲಿ ಕುಳಿತುಕೋ ಎಂದು ತಿಳಿಸಿದನು’ ಎಂದಿದ್ದಾನೆ.

*ಕೀರ್ತನೆ 110:1*

36 ‘‘ಆದ್ದರಿಂದ ಯೆಹೂದ್ಯರೆಲ್ಲರೂ ಇದನ್ನು ನಿಜ ವಾಗಿಯೂ ತಿಳಿದುಕೊಳ್ಳಬೇಕು: ದೇವರು ಯೇಸುವನ್ನು ಪ್ರಭು ವನ್ನಾಗಿಯೂ ಕ್ರಿಸ್ತನನ್ನಾಗಿಯೂ ಮಾಡಿದ್ದಾನೆ. ನೀವು ಶಿಲುಬೆ ಗೇರಿಸಿದ ವ್ಯಕ್ತಿಯೇ ಆತನು!’’

---

**ಪ್ರವಾದಿಯಾಗಿದ್ದನು** ಕೀರ್ತನೆ 132:11

[37]ಇದನ್ನು ಕೇಳಿದಾಗ, ಅವರ ಹೃದಯದಲ್ಲಿ ಅಲಗು ನೆಟ್ಟಂತಾಯಿತು. ಅವರು ಪೇತ್ರನನ್ನು ಮತ್ತು ಉಳಿದ ಅಪೊಸ್ತಲರನ್ನು, ‘‘ಈಗ ನಾವೇನು ಮಾಡಬೇಕು?’’ ಎಂದು ಕೇಳಿದರು.

[38]ಪೇತ್ರನು ಅವರಿಗೆ, ‘‘ನಿಮ್ಮಲ್ಲಿ ಪ್ರತಿಯೊಬ್ಬರೂ ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಂಡು ಯೇಸು ಕ್ರಿಸ್ತನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ. ಆಗ ದೇವರು ನಿಮ್ಮ ಪಾಪಗಳನ್ನು ಕ್ಷಮಿಸುವನು. ಅಲ್ಲದೆ ದೇವರು ವಾಗ್ದಾನ ಮಾಡಿರುವ ಪವಿತ್ರಾತ್ಮನನ್ನು ಹೊಂದಿಕೊಳ್ಳುವಿರಿ.
[39]ಈ ವಾಗ್ದಾನವನ್ನು ನಿಮಗೂ ನಿಮ್ಮ ಮಕ್ಕಳಿಗೂ ಬಹುದೂರದಲ್ಲಿರುವ ಜನರಿಗೂ ಕೊಡಲಾಗಿದೆ. ನಮ್ಮ ದೇವರಾದ ಪ್ರಭು ತನ್ನ ಬಳಿಗೆ ಕರೆಯುವ ಪ್ರತಿಯೊಬ್ಬರಿಗೂ ಈ ವಾಗ್ದಾನವನ್ನು ಕೊಟ್ಟಿದ್ದಾನೆ’’ ಎಂದು ಹೇಳಿದನು.

[40]ಪೇತ್ರನು ಇನ್ನೂ ಅನೇಕ ಮಾತುಗಳಿಂದ ಅವರನ್ನು ಎಚ್ಚರಿಸಿ ‘‘ಈ ದುಷ್ಟ ಸಂತತಿಯಿಂದ ತಪ್ಪಿಸಿಕೊಳ್ಳಿ ’’ ಎಂದು
ಬೇಡಿಕೊಂಡನು. [41]ಪೇತ್ರನು ಹೇಳಿದ್ದನ್ನು ಸ್ವೀಕರಿಸಿಕೊಂಡ ಜನರು ದೀಕ್ಷಾಸ್ನಾನ ಮಾಡಿಸಿಕೊಂಡರು. ಆ ದಿನ ಸುಮಾರು ಮೂರುಸಾವಿರ ಜನರು ವಿಶ್ವಾಸಿಗಳ ಗುಂಪಿಗೆ ಸೇರಿದರು.
[42]ಇವರೆಲ್ಲರೂ ಅಪೊಸ್ತಲರ ಬೋಧನೆಯನ್ನು ಕೇಳುವುದ ರಲ್ಲಿಯೂ ಸಹೋದರರ ಅನ್ಯೋನ್ಯತೆಯಲ್ಲಿಯೂ ರೊಟ್ಟಿ ಮುರಿಯುವುದರಲ್ಲಿಯೂ ಪ್ರಾರ್ಥನೆಗಳಲ್ಲಿಯೂ ನಿರತ ರಾಗಿದ್ದರು.

### ಅನ್ಯೋನ್ಯ ಜೀವನ

[43]ಅಪೊಸ್ತಲರು ಅನೇಕ ಶಕ್ತಿಯುತವಾದ ಮತ್ತು ಅದ್ಭುತ ವಾದ ಕಾರ್ಯಗಳನ್ನು ಮಾಡುತ್ತಿದ್ದರು; ಮತ್ತು ಪ್ರತಿಯೊಬ್ಬ ರಿಗೂ ದೇವರಲ್ಲಿ ಭಯಭಕ್ತಿ ಉಂಟಾಯಿತು.[44]ಎಲ್ಲಾ
ವಿಶ್ವಾಸಿಗಳು ಒಟ್ಟಾಗಿ ವಾಸಿಸುತ್ತಿದ್ದರು. ಅವರು ಪ್ರತಿ ಯೊಂದನ್ನೂ ಹಂಚಿಕೊಳ್ಳುತ್ತಿದ್ದರು. [45]ತಮ್ಮ ಜಮೀನನ್ನು
ಮತ್ತು ತಾವು ಹೊಂದಿದ್ದ ವಸ್ತುಗಳನ್ನು ಮಾರಿ, ಬಂದ ಹಣವ ನ್ನೆಲ್ಲಾ ಕೊರತೆಯಲ್ಲಿದ್ದವರಿಗೆ ಹಂಚಿಕೊಡುತ್ತಿದ್ದರು; [46]ಪ್ರತಿ
ದಿನ ದೇವಾಲಯದಲ್ಲಿ ಸೇರಿಬರುತ್ತಿದ್ದರು. ಅವರೆಲ್ಲರ ಉದ್ದೇಶ ಒಂದೇ ಆಗಿತ್ತು. ಅವರು ತಮ್ಮ ಮನೆಗಳಲ್ಲಿ ರೊಟ್ಟಿ ಮುರಿದು ಒಟ್ಟಾಗಿ ಊಟಮಾಡುತ್ತಿದ್ದರು. ಅವರ ಹೃದಯಗಳು ಆನಂದದಿಂದ ತುಂಬಿದ್ದವು. [47]ಅವರು ದೇವರನ್ನು ಕೊಂಡಾ
ಡುತ್ತಿದ್ದರು ಮತ್ತು ಜನರೆಲ್ಲರೂ ಅವರನ್ನು ಇಷ್ಟಪಡುತ್ತಿದ್ದರು. ಪ್ರತಿದಿನವೂ ಹೆಚ್ಚುಹೆಚ್ಚು ಜನರು ರಕ್ಷಣೆ ಹೊಂದುತ್ತಿದ್ದರು; ಪ್ರಭುವು ಅವರನ್ನೆಲ್ಲಾ ವಿಶ್ವಾಸಿಗಳ ಸಭೆಗೆ ಸೇರಿಸುತ್ತಿದ್ದನು.

### ಪೇತ್ರನಿಂದ ಗುಣಹೊಂದಿದ ಕುಂಟ

3 ಒಂದು ದಿನ ಪೇತ್ರ ಮತ್ತು ಯೋಹಾನ ದೇವಾಲಯಕ್ಕೆ* ಹೋದರು. ಆಗ ಮಧ್ಯಾಹ್ನ ಮೂರು ಗಂಟೆಯ ಸಮಯ ವಾಗಿತ್ತು. ಈ ವೇಳೆಯಲ್ಲೇ ಪ್ರತಿದಿನ ಪ್ರಾರ್ಥನಾ ಕೂಟ ನಡೆ ಯುತ್ತಿತ್ತು. [2]ಅವರು ದೇವಾಲಯಕ್ಕೆ ಹೋಗುತ್ತಿದ್ದಾಗ
ಅಲ್ಲೊಬ್ಬ ಹುಟ್ಟುಕುಂಟನಿದ್ದನು. ಅವನಿಗೆ ನಡೆಯಲಾಗು ತ್ತಿರಲಿಲ್ಲ. ಆದ್ದರಿಂದ ಅವನ ಕೆಲವು ಸ್ನೇಹಿತರು ಅವನನ್ನು ಪ್ರತಿ ದಿನ ದೇವಾಲಯಕ್ಕೆ ಹೊತ್ತುಕೊಂಡು ಬಂದು, ದೇವಾಲಯದ ಹೊರ ಬಾಗಿಲುಗಳ ಒಂದರ ಸಮೀಪದಲ್ಲಿ ಕುಳ್ಳಿರಿಸುತ್ತಿದ್ದರು. ಆ ಬಾಗಿಲಿನ ಹೆಸರು ‘ಸುಂದರ ದ್ವಾರ’. ಅವನು ದೇವಾಲಯಕ್ಕೆ ಹೋಗುವ ಜನರಿಂದ ಭಿಕ್ಷೆ ಬೇಡುತ್ತಿದ್ದನು. [3]ಅಂದು ದೇವಾ
ಲಯದೊಳಕ್ಕೆ ಹೋಗುತ್ತಿದ್ದ ಪೇತ್ರ ಮತ್ತು ಯೋಹಾನರನ್ನು ಕಂಡು ಭಿಕ್ಷೆ ಕೇಳಿದನು. [4]ಪೇತ್ರ ಮತ್ತು ಯೋಹಾನ ಆ ಕುಂಟ
ನಿಗೆ, ‘‘ನಮ್ಮನ್ನು ನೋಡು!’’ ಎಂದರು. [5]ಅವನು ಅವರನ್ನು
ನೋಡಿದನು. ಅವರು ಸ್ವಲ್ಪ ಹಣಕೊಡಬಹುದೆಂದು ಅವನು ಭಾವಿಸಿಕೊಂಡನು. [6]ಆದರೆ ಪೇತ್ರನು, ‘‘ನನ್ನಲ್ಲಿ ಬೆಳ್ಳಿಬಂಗಾರ
ಗಳಿಲ್ಲ, ಆದರೆ ನನ್ನಲ್ಲಿರುವುದನ್ನು ನಿನಗೆ ಕೊಡಬಲ್ಲೆನು. ನಜರೇತಿನ ಯೇಸು ಕ್ರಿಸ್ತನ ಹೆಸರಿನಲ್ಲಿ ಎದ್ದು ನಡೆ!’’ ಎಂದು ಹೇಳಿ, [7]ಆ ಮನುಷ್ಯನ ಕೈಹಿಡಿದು ಎತ್ತಿದನು. ಆ ಕೂಡಲೇ ಅವನ
ಕಾಲುಗಳು ಮತ್ತು ಪಾದಗಳು ಬಲಗೊಂಡವು. [8]ಅವನು
ಜಿಗಿದು, ತನ್ನ ಪಾದಗಳ ಮೇಲೆ ನಿಂತುಕೊಂಡು ನಡೆಯತೊಡಗಿ ದನು. ಅವನೂ ಅವರೊಂದಿಗೆ ದೇವಾಲಯಕ್ಕೆ ಹೋದನು. ಅವನು ನಡೆಯುತ್ತಾ ಜಿಗಿಯುತ್ತಾ ದೇವರನ್ನು ಕೊಂಡಾಡು ತ್ತಿದ್ದನು. [9-10]ಜನರೆಲ್ಲರೂ ಅವನನ್ನು ಗುರುತಿಸಿದರು. ಸುಂದರ
ದ್ವಾರದ ಬಳಿಯಲ್ಲಿ ಯಾವಾಗಲೂ ಕುಳಿತುಕೊಂಡು ಭಿಕ್ಷೆ ಬೇಡುತ್ತಿದ್ದ ಕುಂಟನೇ ಇವನೆಂದು ಜನರಿಗೆ ತಿಳಿದಿತ್ತು. ಈಗ ಅದೇ ವ್ಯಕ್ತಿಯು ನಡೆಯುತ್ತಾ ದೇವರನ್ನು ಕೊಂಡಾಡುತ್ತಿರು ವುದನ್ನು ಕಂಡು ಅವರು ಆಶ್ಚರ್ಯಗೊಂಡು ಬೆರಗಾದರು.

### ಜನರಿಗೆ ಪೇತ್ರನ ವಿವರಣೆ

[11]ಆ ಮನುಷ್ಯನು ಪೇತ್ರ ಮತ್ತು ಯೋಹಾನರನ್ನು ಹಿಡಿದು
ಕೊಂಡೇ ನಿಂತಿದ್ದನು. ಅವನಿಗೆ ಗುಣವಾದದ್ದರಿಂದ ಜನ ರೆಲ್ಲರೂ ಆಶ್ಚರ್ಯಗೊಂಡಿದ್ದರು. ಸೊಲೊಮೋನನ ಮಂಟ ಪದ ಬಳಿ ನಿಂತಿದ್ದ ಪೇತ್ರ ಮತ್ತು ಯೋಹಾನರ ಬಳಿ ಅವರು ಓಡಿಬಂದರು. [12]ಆಗ ಪೇತ್ರನು ಅವರಿಗೆ, ‘‘ನನ್ನ ಯೆಹೂದ್ಯ
ಸಹೋದರರೇ, ಇದನ್ನು ಕಂಡು ನೀವು ಯಾಕೆ ಆಶ್ಚರ್ಯ ಗೊಂಡಿರುವಿರಿ? ಈ ಮನುಷ್ಯನನ್ನು ನಡೆಯುವಂತೆ ಮಾಡಿದ್ದು ನಮ್ಮ ಶಕ್ತಿಯೆಂದು ನೀವು ನಮ್ಮನ್ನು ನೋಡುತ್ತಿರುವಿರಾ? ನಾವು ಒಳ್ಳೆಯವರಾಗಿರುವುದರಿಂದ ಈ ಕಾರ್ಯವಾಯಿತೆಂದು ಭಾವಿಸಿಕೊಂಡಿದ್ದೀರಾ? [13]ಈ ಕಾರ್ಯವನ್ನು ಮಾಡಿದ್ದು
ನಾವಲ್ಲ! ದೇವರು! ಆತನೇ ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು ಯಾಕೋಬನ* ದೇವರು. ಆತನೇ ನಮ್ಮ ಪಿತೃಗಳೆಲ್ಲರ ದೇವರು. ಆತನು ತನ್ನ ವಿಶೇಷ ಸೇವಕನಾದ ಯೇಸುವನ್ನು ಮಹಿಮೆಪಡಿಸಿದ್ದಾನೆ. ಆದರೆ ನೀವು ಯೇಸು ವನ್ನು ಕೊಲ್ಲಲು ಒಪ್ಪಿಸಿಕೊಟ್ಟಿರಿ. ಯೇಸುವನ್ನು ಬಿಡುಗಡೆ ಮಾಡಲು ಪಿಲಾತನು ನಿರ್ಧರಿಸಿದನು. ಆದರೆ ನೀವು ಪಿಲಾತ ನಿಗೆ, ನಮಗೆ ಯೇಸು ಬೇಕಿಲ್ಲವೆಂದು ಹೇಳಿದಿರಿ. [14]ಯೇಸು
ಪರಿಶುದ್ಧನಾಗಿದ್ದನು ಮತ್ತು ಒಳ್ಳೆಯವನಾಗಿದ್ದನು. ಆದರೆ ನೀವು ಆತನನ್ನು ತಿರಸ್ಕರಿಸಿದಿರಿ. ಆತನ ಬದಲಾಗಿ ಕೊಲೆಗಾ ರನನ್ನು* ಬಿಡುಗಡೆ ಮಾಡಬೇಕೆಂದು ಪಿಲಾತನನ್ನು ಬೇಡಿ

**ದೇವಾಲಯ** ಯೆಹೂದ್ಯರ ಆರಾಧನಾ ಮಂದಿರ. ಇದು ಜೆರುಸಲೇಮಿನಲ್ಲಿದೆ.

**ಅಬ್ರಹಾಮ, ಇಸಾಕ, ಯಾಕೋಬ** ಹಳೆ ಒಡಂಬಡಿಕೆಯ ಕಾಲದ ಅತ್ಯಂತ ಪ್ರಮುಖ ಯೆಹೂದ್ಯನಾಯಕರು.

**ಕೊಲೆಗಾರ** ಬರಬ್ಬ (ಲೂಕ 23:18).

ಕೊಂಡಿರಿ. 15ಹೀಗೆ ನೀವು ಜೀವದಾಯಕನನ್ನೇ ಕೊಂದು
ಹಾಕಿದಿರಿ! ಆದರೆ ದೇವರು ಆತನನ್ನು ಸತ್ತವರೊಳಗಿಂದ
ಜೀವಂತವಾಗಿ ಎಬ್ಬಿಸಿದನು. ಇದಕ್ಕೆ ನಾವೇ ಸಾಕ್ಷಿಗಳು. ಇದನ್ನು
ನಾವು ನಮ್ಮ ಕಣ್ಣಾರೆ ಕಂಡಿದ್ದೇವೆ. 16ನಿಮ್ಮ ಕಣ್ಣೆದುರಿಗಿರುವ
ಇವನ ಗುರುತು ನಿಮ್ಮೆಲ್ಲರಿಗೂ ಇದೆ. ಇವನು ಗುಣವಾದದ್ದಕ್ಕೆ
ಇವನು ಯೇಸುವಿನ ಹೆಸರಿನಲ್ಲಿ ಇಟ್ಟ ನಂಬಿಕೆಯೇ ಕಾರಣ.
ಆ ಹೆಸರೇ ಇವನನ್ನು ಬಲಪಡಿಸಿತು. ಆತನ ಮೂಲಕ ಉಂಟಾ
ಗಿರುವ ನಂಬಿಕೆಯೇ ಇವನನ್ನು ನಿಮ್ಮೆಲ್ಲರ ಮುಂದೆ ಗುಣ
ಪಡಿಸಿತು.

17‘‘ಸಹೋದರರೇ, ನೀವು ತಿಳಿಯದೆ ಯೇಸುವಿಗೆ ಹೀಗೆ
ಮಾಡಿದಿರೆಂದು ನನಗೆ ಗೊತ್ತಿದೆ. ನಿಮ್ಮ ನಾಯಕರು ಸಹ
ಅರ್ಥಮಾಡಿಕೊಳ್ಳಲಿಲ್ಲ. 18 ಹೀಗಾಗುತ್ತದೆ ಎಂದು ದೇವರು
ಮೊದಲೇ ತಿಳಿಸಿದ್ದನು. ಕ್ರಿಸ್ತನು ಶ್ರಮೆ ಅನುಭವಿಸಿ
ಸಾಯುವನೆಂದು ದೇವರು ತನ್ನ ಪ್ರವಾದಿಗಳ ಮೂಲಕ
ಮೊದಲೇ ತಿಳಿಸಿದ್ದನ್ನು ಹೀಗೆ ನೆರವೇರಿಸಿದ್ದಾನೆ. 19ಆದ್ದರಿಂದ
ನೀವು ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ
ತಿರುಗಿಕೊಳ್ಳಿ, ಆಗ ಆತನು ನಿಮ್ಮ ಪಾಪಗಳನ್ನು ಕ್ಷಮಿಸುವನು.
20ಪ್ರಭುವು ನಿಮಗೆ ಆತ್ಮಿಕ ವಿಶ್ರಾಂತಿಯನ್ನು ಕೊಡುವನು.
ಆತನು ಕ್ರಿಸ್ತನನ್ನಾಗಿ ಆರಿಸಿಕೊಂಡ ಯೇಸುವನ್ನು ನಿಮಗೆ
ಕೊಡುವನು.

21ಆದರೆ ಎಲ್ಲವನ್ನು ಸರಿಪಡಿಸುವ ಕಾಲ ಬರುವತನಕ
ಯೇಸು ಪರಲೋಕದಲ್ಲೇ ಇರಬೇಕು. ದೇವರು ಬಹುಕಾಲದ
ಹಿಂದೆ ತನ್ನ ಪವಿತ್ರ ಪ್ರವಾದಿಗಳ ಸಂದೇಶದ ಮೂಲಕ
ಮಾತಾಡಿದಾಗ, ಈ ಕಾಲದ ಬಗ್ಗೆ ಹೇಳಿದನು. 22ಮೋಶೆಯು
ಇಂತೆಂದಿದ್ದಾನೆ: ‘ನಿಮ್ಮ ದೇವರಾದ ಪ್ರಭುವು ನಿಮಗೊಬ್ಬ
ಪ್ರವಾದಿಯನ್ನು ಕೊಡುವನು. ನಿಮ್ಮ ಸ್ವಂತ ಜನರ
ಮಧ್ಯದಿಂದಲೇ ಆ ಪ್ರವಾದಿ ಬರುವನು. ಆತನು ನನ್ನಂತೆ
ಇರುವನು. ಆ ಪ್ರವಾದಿ ಹೇಳುವ ಪ್ರತಿಯೊಂದಕ್ಕೂ ನೀವು
ವಿಧೇಯರಾಗಬೇಕು.

23ಆತನಿಗೆ ವಿಧೇಯನಾಗದವನು ದೇವಜನರಿಂದ
ಬೇರ್ಪಟ್ಟು ಮರಣ ಹೊಂದುವನು.’* 24ಸಮುವೇಲನು
ಮತ್ತು ಅವನ ನಂತರದ ಪ್ರವಾದಿಗಳು ಇಂದಿನ ಈ ಕಾಲದ ಬಗ್ಗೆ
ಮಾತಾಡಿದರು.

25ಆ ಪ್ರವಾದಿಗಳು ಹೇಳಿದ ಸಂಗತಿಗಳನ್ನು ನೀವು
ಸ್ವೀಕರಿಸಿಕೊಂಡಿರುವಿರಿ. ದೇವರು ನಿಮ್ಮ ಪಿತೃಗಳೊಂದಿಗೆ
ಮಾಡಿಕೊಂಡ ಒಪ್ಪಂದವನ್ನು ನೀವು ಸ್ವೀಕರಿಸಿಕೊಂಡಿರುವಿರಿ.
ದೇವರು ನಿಮ್ಮ ಪಿತೃವಾದ ಅಬ್ರಹಾಮನಿಗೆ, ‘ನಿನ್ನ
ಕುಟುಂಬದಿಂದ ಭೂಮಿಯ ಮೇಲಿರುವ ಜನರೆಲ್ಲರು
ಆಶೀರ್ವಾದ ಹೊಂದುವರು’* ಎಂದು ಹೇಳಿದನು.
26ದೇವರು ತನ್ನ ವಿಶೇಷ ಸೇವಕನನ್ನು (ಯೇಸುವನ್ನು) ಮೊಟ್ಟ
ಮೊದಲು ನಿಮ್ಮ ಬಳಿಗೆ ಕಳುಹಿಸಿದನು. ನಿಮ್ಮನ್ನು ಆಶೀರ್ವದಿಸು
ವುದಕ್ಕಾಗಿ ದೇವರು ಯೇಸುವನ್ನು ಕಳುಹಿಸಿದನು. ಆತನು
ನಿಮ್ಮನ್ನು ನಿಮ್ಮ ಕೆಟ್ಟಕಾರ್ಯಗಳಿಂದ ದೂರಮಾಡಿ
ಆಶೀರ್ವದಿಸುತ್ತಾನೆ.’’

**ನಿಮ್ಮ ... ಹೊಂದುವನು** ಧರ್ಮೋಪದೇಶ 18:15,19

**ನಿನ್ನ ... ಹೊಂದುವರು** ಆದಿಕಾಂಡ 22:18; 26:24

## ಯೆಹೂದ್ಯರ ನ್ಯಾಯಸಭೆಯ ಮುಂದೆ ಪೇತ್ರ ಮತ್ತು ಯೋಹಾನ

4 ಪೇತ್ರ ಮತ್ತು ಯೋಹಾನ ಜನರೊಂದಿಗೆ ಮಾತಾಡು
ತ್ತಿದ್ದಾಗ, ಕೆಲವು ಜನರು ಅವರ ಬಳಿಗೆ ಬಂದರು. ಅಲ್ಲಿ
ಕೆಲವು ಯೆಹೂದ್ಯಯಾಜಕರಿದ್ದರು, ಕೆಲವು ಸದ್ದುಕಾಯ
ರಿದ್ದರು,* ಮತ್ತು ದೇವಾಲಯ ಕಾಯುವ ಸಿಪಾಯಿಗಳ ಅಧಿ
ಪತಿಯೂ ಇದ್ದನು. 2ಈ ಇಬ್ಬರು ಅಪೊಸ್ತಲರು ಜನರಿಗೆ ಉಪ
ದೇಶ ಮಾಡುತ್ತಿರುವುದನ್ನು ಕಂಡು ಅವರು ಸಿಟ್ಟುಗೊಂಡರು.
ಯೇಸುವಿನ ಶಕ್ತಿಯ ಮೂಲಕವಾಗಿ ಜನರು ಪುನರುತ್ಥಾನ
ಹೊಂದುತ್ತಾರೆ ಎಂದು ಪೇತ್ರ ಮತ್ತು ಯೋಹಾನ ಬೋಧಿಸು
ತ್ತಿದ್ದರು. 3ಯೆಹೂದ್ಯ ನಾಯಕರು ಪೇತ್ರ ಮತ್ತು ಯೋಹಾನ
ರನ್ನು ಬಂಧಿಸಿ ಸೆರೆಮನೆಗೆ ಹಾಕಿದರು. ಆಗಲೇ ಕತ್ತಲಾಗಿತ್ತು.
ಆದ್ದರಿಂದ ಅವರು ಪೇತ್ರ ಮತ್ತು ಯೋಹಾನರನ್ನು ಮರುದಿನದ
ವರೆಗೆ ಸೆರೆಯಲ್ಲಿಟ್ಟರು. 4ಆದರೆ ಪೇತ್ರ ಮತ್ತು ಯೋಹಾನರ
ಬೋಧನೆಯನ್ನು ಕೇಳಿ ಅನೇಕರು ನಂಬಿಕೊಂಡರು. ಆಗ ಆ
ಸಮುದಾಯದಲ್ಲಿ ವಿಶ್ವಾಸಿಗಳ ಸಂಖ್ಯೆ ಐದು ಸಾವಿರಕ್ಕೆ ಏರಿತ್ತು.
5ಮರುದಿನ ಯೆಹೂದ್ಯನಾಯಕರು, ಯೆಹೂದ್ಯರ
ಹಿರಿಯ ನಾಯಕರು ಮತ್ತು ಧರ್ಮೋಪದೇಶಕರು ಜೆರುಸ
ಲೇಮಿನಲ್ಲಿ ಸಭೆಸೇರಿದರು. 6ಅಲ್ಲಿ ಅನ್ನನು (ಪ್ರಧಾನ
ಯಾಜಕ), ಕಾಯಫ, ಯೋಹಾನ ಮತ್ತು ಅಲೆಕ್ಸಾಂಡರ್
ಇದ್ದರು. ಪ್ರಧಾನಯಾಜಕನ ಕುಟುಂಬಕ್ಕೆ ಸೇರಿದ ಪ್ರತಿ
ಯೊಬ್ಬರು ಅಲ್ಲಿದ್ದರು. 7ಅವರು ಪೇತ್ರ, ಯೋಹಾನರನ್ನು
ಅಲ್ಲಿದ್ದ ಎಲ್ಲಾ ಜನರ ಮುಂದೆ ನಿಲ್ಲಿಸಿದರು. ಯೆಹೂದ್ಯ
ನಾಯಕರು ಅವರನ್ನು ‘ನೀವು ಈ ಕುಂಟನನ್ನು ಹೇಗೆ ಗುಣ
ಪಡಿಸಿದಿರಿ? ನೀವು ಯಾವ ಶಕ್ತಿಯನ್ನು ಉಪಯೋಗಿಸಿದಿರಿ?
ಇದನ್ನು ಯಾರ ಅಧಿಕಾರದಿಂದ ಮಾಡಿದಿರಿ?’ ಎಂದು ಅನೇಕ
ಸಲ ಕೇಳಿದರು.

8ಆಗ ಪೇತ್ರನು ಪವಿತ್ರಾತ್ಮಭರಿತನಾದನು. ಅವನು ಅವರಿಗೆ,
‘‘ಜನನಾಯಕರೇ, ಮತ್ತು ಹಿರಿಯನಾಯಕರೇ, 9ಈ ಕುಂಟನಿ
ಗಾದ ಒಳ್ಳೆಯದರ ಬಗ್ಗೆ ನೀವು ನಮ್ಮನ್ನು ಕೇಳುತ್ತಿದ್ದೀರಿ.
10ನಜರೇತಿನ ಯೇಸು ಕ್ರಿಸ್ತನ ಹೆಸರಿನಿಂದ ಈ ಮನುಷ್ಯನಿಗೆ
ಗುಣವಾಯಿತೆಂಬುದನ್ನು ನೀವು ಮತ್ತು ಯೆಹೂದ್ಯರೆಲ್ಲರು
ತಿಳಿದುಕೊಳ್ಳಬೇಕೆಂದು ನಾನು ಬಯಸುತ್ತೇನೆ! ನೀವು ಯೇಸು
ವನ್ನು ಶಿಲುಬೆಗೇರಿಸಿದಿರಿ. ದೇವರು ಆತನನ್ನು ಸತ್ತವರೊಳಗಿಂದ
ಜೀವಂತವಾಗಿ ಎಬ್ಬಿಸಿದನು. ಈ ಮನುಷ್ಯನು ಕುಂಟನಾಗಿದ್ದನು,
ಆದರೆ ಈಗ ಇವನು ಗುಣಹೊಂದಿದ್ದಾನೆ ಮತ್ತು ಯೇಸುವಿನ
ಹೆಸರಿನಿಂದ ನಿಮ್ಮ ಮುಂದೆ ನಿಂತುಕೊಳ್ಳಲು ಶಕ್ತನಾಗಿದ್ದಾನೆ!

11 ‘ಕಟ್ಟುವವರಾದ ನೀವು ಬೇಡವೆಂದ ಕಲ್ಲೇ
(ಯೇಸು) ಮುಖ್ಯವಾದ ಮೂಲೆಗಲ್ಲಾಯಿತು’.
*ಕೀರ್ತನೆ 118:22*

12ರಕ್ಷಣೆಯು ಯೇಸುವಿನಿಂದಲ್ಲದೆ ಬೇರೆ ಯಾರಲ್ಲಿಯೂ
ಸಿಕ್ಕುವುದಿಲ್ಲ. ಆತನ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ

**ಸದ್ದುಕಾಯರು** ಯೆಹೂದ್ಯರ ಒಂದು ಮುಖ್ಯ ಧಾರ್ಮಿಕ ಪಂಗಡ
ದವರು. ಅವರು ಹಳೆ ಒಡಂಬಡಿಕೆಯ ಮೊದಲನೆಯ ಐದು ಪುಸ್ತಕ
ಗಳನ್ನು ಮಾತ್ರ ಸ್ವೀಕರಿಸಿಕೊಂಡಿದ್ದರು. ಜನರು ಮರಣಾನಂತರ ಎದ್ದು
ಬರುವದಿಲ್ಲವೆಂದು ಅವರು ನಂಬಿದ್ದರು.

ಮನುಷ್ಯರೊಳಗೆ ಕೊಟ್ಟಿರುವ ಬೇರೆ ಯಾವ ಹೆಸರಿನಿಂದಲೂ
ನಮಗೆ ರಕ್ಷಣೆಯಾಗುವುದಿಲ್ಲ'' ಎಂದು ಹೇಳಿದನು.

13ಪೇತ್ರ ಮತ್ತು ಯೋಹಾನರಿಗೆ ವಿಶೇಷವಾದ ಯಾವ
ತರಬೇತಿಯಾಗಲಿ ವಿದ್ಯೆಯಾಗಲಿ ಇಲ್ಲವೆಂಬುದು ಯೆಹೂದ್ಯ
ನಾಯಕರಿಗೆ ಗೊತ್ತಿತ್ತು. ಅಲ್ಲದೆ ಅವರು ಹೆದರದೆ ಮಾತಾಡು
ವುದನ್ನು ಸಹ ನಾಯಕರು ಗಮನಿಸಿದರು. ಆದ್ದರಿಂದ ಆ
ನಾಯಕರಿಗೆ ಬಹಳ ಆಶ್ಚರ್ಯವಾಯಿತು. ಪೇತ್ರ ಮತ್ತು
ಯೋಹಾನರು ಯೇಸುವಿನೊಂದಿಗೆ ಇದ್ದರೆಂಬುದನ್ನು ಅವರು
ಆ ಬಳಿಕ ಗ್ರಹಿಸಿಕೊಂಡರು. 14ಈ ಇಬ್ಬರು ಅಪೊಸ್ತಲರ ಪಕ್ಕ
ದಲ್ಲೇ ನಿಂತುಕೊಂಡಿದ್ದ ಕುಂಟನನ್ನು ಅವರು ನೋಡಿದರು.
ಅವನಿಗೆ ಗುಣವಾಗಿರುವುದನ್ನು ಅವರು ಕಂಡರು. ಆದ್ದರಿಂದ
ಅಪೊಸ್ತಲರ ಮಾತಿಗೆ ವಿರುದ್ಧವಾಗಿ ಅವರೇನೂ ಹೇಳ
ಲಾಗಲಿಲ್ಲ. 15ಯೆಹೂದ್ಯನಾಯಕರು ಅಪೊಸ್ತಲರನ್ನು ಸಭೆ
ಯಿಂದ ಹೊರಗೆ ಕಳುಹಿಸಿ, 16‘‘ಇವರಿಗೆ ನಾವೇನು
ಮಾಡೋಣ? ಇವರು ದೊಡ್ಡ ಅದ್ಭುತಕಾರ್ಯ ಮಾಡಿ
ರುವುದು ಜೆರುಸಲೇಮಿನಲ್ಲಿರುವ ಪ್ರತಿಯೊಬ್ಬರಿಗೂ ಗೊತ್ತಿದೆ.
ಈ ಅದ್ಭುತಕಾರ್ಯವು ಸ್ಪಷ್ಟವಾಗಿರುವುದರಿಂದ ಅದನ್ನು ಅಸತ್ಯ
ವೆಂದು ಹೇಳಲಾಗದು. 17ಆದರೆ ಈ ಮನುಷ್ಯನ (ಯೇಸುವಿನ)
ಬಗ್ಗೆ ಜನರಿಗೆ ಹೇಳದಂತೆ ನಾವು ಅವರನ್ನು ಬೆದರಿಸಬೇಕು. ಆಗ
ಈ ಸಮಾಚಾರ ಜನರ ಮಧ್ಯದಲ್ಲಿ ಹರಡುವುದಿಲ್ಲ'' ಎಂದು
ಅವರು ಮಾತಾಡಿಕೊಂಡರು.

18ಆದ್ದರಿಂದ ಯೆಹೂದ್ಯನಾಯಕರು ಪೇತ್ರ ಮತ್ತು
ಯೋಹಾನರನ್ನು ಮತ್ತೆ ಒಳಗೆ ಕರೆಸಿ, ಯೇಸುವಿನ ಹೆಸರಿನಲ್ಲಿ
ಏನೂ ಹೇಳದಂತೆ, ಏನೂ ಬೋಧಿಸದಂತೆ ಎಚ್ಚರಿಕೆ ಕೊಟ್ಟರು.
19ಆದರೆ ಪೇತ್ರ ಮತ್ತು ಯೋಹಾನ ಅವರಿಗೆ, ‘‘ನಾವು ನಿಮಗೆ
ವಿಧೇಯರಾಗಬೇಕೇ ಅಥವಾ ದೇವರಿಗೆ ವಿಧೇಯರಾಗ
ಬೇಕೇ? ಇದರಲ್ಲಿ ಯಾವುದು ದೇವರಿಗೆ ಇಷ್ಟವಾದದ್ದು?
ನೀವೇ ಹೇಳಿ. 20ನಾವಂತೂ ಸುಮ್ಮನಿರಲಾರೆವು. ನಾವು ಕಂಡ
ಮತ್ತು ಕೇಳಿದ ಸಂಗತಿಗಳ ಬಗ್ಗೆ ಜನರಿಗೆ ಹೇಳಲೇಬೇಕು''
ಎಂದು ಉತ್ತರಕೊಟ್ಟರು. 21-22ಯೆಹೂದ್ಯನಾಯಕರಿಗೆ
ಅಪೊಸ್ತಲರನ್ನು ದಂಡಿಸಲು ಯಾವ ಮಾರ್ಗವೂ ತೋಚಲಿಲ್ಲ,
ಯಾಕೆಂದರೆ ಸಂಭವಿಸಿದ ಕಾರ್ಯಕ್ಕಾಗಿ ಜನರೆಲ್ಲರೂ ದೇವ
ರನ್ನು ಕೊಂಡಾಡುತ್ತಿದ್ದರು. (ಈ ಸೂಚಕಕಾರ್ಯದಿಂದ ಗುಣ
ಹೊಂದಿದ ವ್ಯಕ್ತಿಗೆ ನಲವತ್ತು ವರ್ಷಕ್ಕಿಂತಲೂ ಹೆಚ್ಚು ವಯಸ್ಸಾ
ಗಿತ್ತು!) ಆದ್ದರಿಂದ ಯೆಹೂದ್ಯನಾಯಕರು ಅಪೊಸ್ತಲರನ್ನು
ಮತ್ತೆ ಎಚ್ಚರಿಸಿ ಕಳುಹಿಸಿಬಿಟ್ಟರು.

## ಪೇತ್ರ ಮತ್ತು ಯೋಹಾನರು ವಿಶ್ವಾಸಿಗಳ ಬಳಿಗೆ ಹಿಂತಿರುಗಿದರು

23ಪೇತ್ರ ಮತ್ತು ಯೋಹಾನರು ಯೆಹೂದ್ಯನಾಯಕರ ಸಭೆ
ಯಿಂದ ಹೊರಟು ತಮ್ಮ ಸಮುದಾಯಕ್ಕೆ ಹೋದರು. ಮಹಾ
ಯಾಜಕರು ಮತ್ತು ಯೆಹೂದ್ಯರ ಹಿರಿಯ ನಾಯಕರು ತಮಗೆ
ಹೇಳಿದ ಪ್ರತಿಯೊಂದನ್ನು ಅವರು ತಮ್ಮ ಸಮುದಾಯದವರಿಗೆ
ತಿಳಿಸಿದರು. 24ಇದನ್ನು ಕೇಳಿದಾಗ ವಿಶ್ವಾಸಿಗಳು ಏಕಮನಸ್ಸಿ
ನಿಂದ ದೇವರಲ್ಲಿ ಪ್ರಾರ್ಥಿಸಿದರು: ಅವರೆಲ್ಲರಲ್ಲಿ ಒಂದೇ
ಮನಸ್ಸಿತ್ತು. ‘‘ಒಡೆಯನೇ, ಆಕಾಶವನ್ನೂ ಭೂಮಿಯನ್ನೂ
ಸಮುದ್ರವನ್ನೂ ಮತ್ತು ಲೋಕದಲ್ಲಿರುವ ಪ್ರತಿಯೊಂದನ್ನೂ
ನಿರ್ಮಿಸಿದಾತನು ನೀನೇ. 25ನಮ್ಮ ಪಿತೃವಾದ ದಾವೀದನು ನಿನ್ನ
ಸೇವಕನಾಗಿದ್ದನು. ಅವನು ಪವಿತ್ರಾತ್ಮನ ಸಹಾಯದಿಂದ ಈ
ಮಾತುಗಳನ್ನು ಬರೆದನು:

> ‘ಜನಾಂಗಗಳು ಕೂಗಾಡುವುದೇಕೆ? ಈ
> ಲೋಕದ ಜನರು ದೇವರಿಗೆ ವಿರೋಧವಾಗಿ
> ಕಾರ್ಯಗಳನ್ನು ಯೋಚಿಸುತ್ತಿರುವುದೇಕೆ?
> ಇದರಿಂದ ಪ್ರಯೋಜನವೇನೂ ಇಲ್ಲ!
> 26 ಭೂಲೋಕದ ರಾಜರು ಹೋರಾಡಲು ಸಿದ್ಧ
> ರಾಗಿದ್ದಾರೆ; ಪ್ರಭುವಿಗೂ ಆತನ ಕ್ರಿಸ್ತನಿಗೂ
> ವಿರೋಧವಾಗಿ ಅಧಿಪತಿಗಳೆಲ್ಲರೂ ಒಟ್ಟಾಗಿ
> ಸೇರಿದ್ದಾರೆ.' *ಕೀರ್ತನೆ 2:1-2*

27ಹೆರೋದರಾಜನು, ಪೊಂತಿಯಸ್ ಪಿಲಾತನು,
ಜನಾಂಗಗಳು ಮತ್ತು ಯೆಹೂದ್ಯರು ಈ ಪಟ್ಟಣದಲ್ಲಿ ಒಟ್ಟಾಗಿ
ಸೇರಿಕೊಂಡು ಯೇಸುವನ್ನು ವಿರೋಧಿಸಿದಾಗ ಈ ಸಂಗತಿಗಳು
ನಿಜವಾಗಿಯೂ ನೆರವೇರಿದವು. ಯೇಸು ನಿನ್ನ ಪವಿತ್ರ ಸೇವಕ
ನಾಗಿದ್ದಾನೆ. ನೀನು ಆತನನ್ನು ಅಭಿಷೇಕಿಸಿದೆ. 28ಯೇಸುವಿನ
ವಿರುದ್ಧ ಒಟ್ಟಾಗಿ ಬಂದ ಈ ಜನರು ನಿನ್ನ ಯೋಜನೆ ನೆರವೇರು
ವಂತೆ ಮಾಡಿದರು. ನಿನ್ನ ಶಕ್ತಿಯಿಂದಲೂ ನಿನ್ನ ಚಿತ್ತದಿಂದಲೂ
ಇದು ನೆರವೇರಿತು. 29ಪ್ರಭುವೇ, ಈಗ ಅವರು ಹೇಳುತ್ತಿರುವು
ದನ್ನು ಕೇಳು. ಅವರು ನಮ್ಮನ್ನು ಹೆದರಿಸಲು ಪ್ರಯತ್ನಿಸು
ತ್ತಿದ್ದಾರೆ! ಪ್ರಭುವೇ ನಾವು ನಿನ್ನ ಸೇವಕರು. ನಿನ್ನ ವಾಕ್ಯವನ್ನು
ಭಯವಿಲ್ಲದೆ ಹೇಳಲು ನೀನೇ ಸಹಾಯಮಾಡು. 30ನಿನ್ನ ಕೈ
ಚಾಚಿ ಯೇಸುವಿನ ಹೆಸರಿನ ಮೂಲಕ ರೋಗಿಗಳನ್ನು ಗುಣ
ಪಡಿಸು; ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ
ಮಾಡು.''

31ಹೀಗೆ ವಿಶ್ವಾಸಿಗಳು ಪ್ರಾರ್ಥಿಸುತ್ತಿದ್ದಾಗ, ಅವರು
ಸಭೆಸೇರಿದ್ದ ಸ್ಥಳವು ನಡುಗಿತು. ಅವರೆಲ್ಲರೂ ಪವಿತ್ರಾತ್ಮ
ಭರಿತರಾದರು ಮತ್ತು ದೇವರ ವಾಕ್ಯವನ್ನು ಭಯವಿಲ್ಲದೆ
ಪ್ರಕಟಿಸಿದರು.

## ವಿಶ್ವಾಸಿಗಳ ಅನ್ಯೋನ್ಯ ಜೀವನ

32 ವಿಶ್ವಾಸಿಗಳ ಹೃದಯವೂ ಪ್ರಾಣವೂ ಒಂದೇ ಆಗಿತ್ತು.
ಸಮುದಾಯದಲ್ಲಿದ್ದ ಯಾವನಾಗಲಿ ತನ್ನಲ್ಲಿರುವವುಗಳನ್ನು ತನ್ನ
ದೆಂದು ಹೇಳುತ್ತಿರಲಿಲ್ಲ. ಬದಲಾಗಿ, ಅವರು ಪ್ರತಿಯೊಂದನ್ನು
ಹಂಚಿಕೊಳ್ಳುತ್ತಿದ್ದರು. 33ಪ್ರಭುವಾದ ಯೇಸು ನಿಜವಾಗಿಯೂ
ಸತ್ತವರೊಳಗಿಂದ ಜೀವಂತವಾಗಿ ಎದ್ದುಬಂದನೆಂದು ಅಪೊಸ್ತ
ಲರು ಬಹುಬಲವಾಗಿ ಜನರಿಗೆ ಹೇಳುತ್ತಿದ್ದರು. ದೇವರು ವಿಶ್ವಾಸಿ
ಗಳೆಲ್ಲರನ್ನು ಬಹಳವಾಗಿ ಆಶೀರ್ವದಿಸಿದನು. 34ಅವರೆಲ್ಲರ
ಅವಶ್ಯಕತೆಗಳನ್ನು ಪೂರೈಸಲಾಗುತ್ತಿತ್ತು. ಜಮೀನುಗಳನ್ನು
ಮತ್ತು ಮನೆಗಳನ್ನು ಹೊಂದಿದ್ದ ಪ್ರತಿಯೊಬ್ಬರು ಅವುಗಳನ್ನು
ಮಾರಿ, 35ಬಂದ ಹಣವನ್ನು ಅಪೊಸ್ತಲರ ಪಾದಗಳ ಬಳಿ
ಇಡುತ್ತಿದ್ದರು. ಬಳಿಕ ಅದನ್ನು ಪ್ರತಿಯೊಬ್ಬರಿಗೂ ಅವರವರ
ಅಗತ್ಯತೆಗಳಿಗನುಸಾರವಾಗಿ ಹಂಚಲಾಗುತ್ತಿತ್ತು.

36ಆ ವಿಶ್ವಾಸಿಗಳಲ್ಲಿ ಯೋಸೇಫ ಎಂಬವನೂ ಇದ್ದನು.
ಅಪೊಸ್ತಲರು ಅವನನ್ನು ಬಾರ್ನಬ ಎಂದು ಕರೆಯುತ್ತಿದ್ದರು.

(ಬಾರ್ನಬ ಅಂದರೆ ‘ಧೈರ್ಯದಾಯಕ’) ಸೈಪ್ರಸ್‌ನಲ್ಲಿ ಹುಟ್ಟಿದ
ಇವನು ಲೇವಿಯನಾಗಿದ್ದನು.* 37ಯೋಸೇಫನಿಗೆ ಒಂದು
ಹೊಲವಿತ್ತು. ಅವನು ಅದನ್ನು ಮಾರಿ ಬಂದ ಹಣವನ್ನು
ಅಪೊಸ್ತಲರ ಪಾದಗಳ ಬಳಿ ಇಟ್ಟನು.

### ಅನನೀಯ ಮತ್ತು ಸಪ್ಫೈರ

5 ಅನನೀಯ ಎಂಬ ಒಬ್ಬನಿದ್ದನು. ಅವನ ಹೆಂಡತಿಯ
ಹೆಸರು ಸಪ್ಫೈರ. ಅನನೀಯ ತನ್ನಲ್ಲಿದ್ದ ಸ್ವಲ್ಪ ಜಮೀನನ್ನು
ಮಾರಿದನು. 2ಆದರೆ, ಬಂದ ಹಣದಲ್ಲಿ ಒಂದು ಭಾಗವನ್ನು
ಮಾತ್ರ ಅವನು ಅಪೊಸ್ತಲರ ಪಾದಗಳ ಬಳಿ ಇಟ್ಟನು. ಅವನು
ಸ್ವಲ್ಪ ಹಣವನ್ನು ತನಗೋಸ್ಕರ ರಹಸ್ಯವಾಗಿಟ್ಟುಕೊಂಡನು.
ಅವನ ಹೆಂಡತಿಗೆ ಇದು ತಿಳಿದಿತ್ತು. ಆಕೆಯೂ ಅದಕ್ಕೆ ಒಪ್ಪಿ
ಕೊಂಡಿದ್ದಳು. 3ಪೇತ್ರನು, ‘‘ಅನನೀಯನೇ, ನಿನ್ನ ಹೃದಯ
ವನ್ನು ಆಳಲು ನೀನು ಸೈತಾನನಿಗೆ ಒಪ್ಪಿಸಿಕೊಟ್ಟದ್ದೇಕೆ? ನೀನು
ಸುಳ್ಳು ಹೇಳಿ, ಪವಿತ್ರಾತ್ಮನನ್ನು ಮೋಸಪಡಿಸಲು ಪ್ರಯತ್ನಿಸಿದೆ.
ನೀನು ನಿನ್ನ ಜಮೀನನ್ನು ಮಾರಿದೆ, ಆದರೆ ಬಂದ ಹಣದಲ್ಲಿ
ಒಂದು ಭಾಗವನ್ನು ನೀನು ನಿನಗೋಸ್ಕರ ಇಟ್ಟುಕೊಂಡದ್ದೇಕೆ?
4ನೀನು ಜಮೀನನ್ನು ಮಾರುವುದಕ್ಕಿಂತ ಮೊದಲು ಅದು
ನಿನ್ನದೇ ಆಗಿತ್ತು. ನೀನು ಮಾರಿದ ಮೇಲೆಯೂ ಬಂದ ಹಣ
ನಿನ್ನದೇ ಆಗಿತ್ತು. ಈ ಕೆಟ್ಟಕಾರ್ಯವನ್ನು ಮಾಡಲು ನೀನು
ಯಾಕೆ ಯೋಚಿಸಿಕೊಂಡೆ? ನೀನು ಸುಳ್ಳು ಹೇಳಿದ್ದು ದೇವರಿಗೆ,
ಮನುಷ್ಯರಿಗಲ್ಲ!’’ ಎಂದು ಹೇಳಿದನು. 5-6ಅನನೀಯ ಇದನ್ನು
ಕೇಳಿದ ಕೂಡಲೇ ಕೆಳಗೆ ಬಿದ್ದು ಸತ್ತುಹೋದನು. ಕೆಲವು ಯೌವ
ನಸ್ಥರು ಬಂದು ಅವನ ದೇಹವನ್ನು ಬಟ್ಟೆಯಲ್ಲಿ ಸುತ್ತಿದರು.
ಅವರು ಅದನ್ನು ಹೊತ್ತುಕೊಂಡು ಹೋಗಿ ಸಮಾಧಿ ಮಾಡಿ
ದರು. ಇದರ ಬಗ್ಗೆ ಕೇಳಿದ ಪ್ರತಿಯೊಬ್ಬರೂ ಭಯಭ್ರಾಂತ
ರಾದರು. 7ಸುಮಾರು ಮೂರು ಗಂಟೆಗಳಾದ ನಂತರ ಅವನ
ಹೆಂಡತಿಯಾದ ಸಪ್ಫೈರ ಒಳಗೆ ಬಂದಳು. ನಡೆದ ಸಂಗತಿಯ ಬಗ್ಗೆ
ಸಪ್ಫೈರಳಿಗೆ ಗೊತ್ತಿರಲಿಲ್ಲ. 8ಪೇತ್ರನು ಆಕೆಗೆ,‘‘ನಿಮ್ಮ ಜಮೀನಿ
ನಿಂದ ನಿಮಗೆ ಎಷ್ಟು ಹಣ ಬಂತೆಂದು ನನಗೆ ಹೇಳು. ಇಷ್ಟೇ
ಹಣವೋ?’’ ಎಂದು ಕೇಳಿದನು.

ಸಪ್ಫೈರಳು, ‘‘ಹೌದು ಅಷ್ಟೇ!’’ ಎಂದು ಹೇಳಿದಳು.

9ಪೇತ್ರನು ಆಕೆಗೆ, ‘‘ನೀನು ಮತ್ತು ನಿನ್ನ ಗಂಡನು, ಪ್ರಭು
ವಿನ ಆತ್ಮನನ್ನು ಪರೀಕ್ಷಿಸಲು ಒಪ್ಪಿಕೊಂಡಿದ್ದೇಕೆ? ಆಗೋ, ನಿನ್ನ
ಗಂಡನನ್ನು ಹೂಳಿಟ್ಟ ಜನರು ಬಾಗಿಲ ಬಳಿಗೆ ಬಂದಿದ್ದಾರೆ!
ಅವರು ನಿನ್ನನ್ನೂ ಅದೇ ರೀತಿ ಹೊತ್ತುಕೊಂಡು ಹೋಗುವರು’’
ಎಂದು ಹೇಳಿದನು. 10ತಕ್ಷಣವೇ ಸಪ್ಫೈರಳು ಅವನ ಪಾದಗಳ
ಮುಂದೆ ಬಿದ್ದು ಸತ್ತುಹೋದಳು. ಆ ಯೌವನಸ್ಥರು ಒಳಗೆ
ಬಂದು ನೋಡಿದಾಗ ಆಕೆ ಸತ್ತುಹೋಗಿದ್ದಳು. ಅವರು ಆಕೆ
ಯನ್ನು ಹೊತ್ತುಕೊಂಡು ಹೋಗಿ, ಆಕೆಯ ಗಂಡನ ಪಕ್ಕದಲ್ಲಿ
ಹೂಳಿಟ್ಟರು. 11ಈ ಸಂಗತಿಗಳ ಬಗ್ಗೆ ಕೇಳಿದ ವಿಶ್ವಾಸಿಗಳೆಲ್ಲರೂ
ಮತ್ತು ಜನರೆಲ್ಲರೂ ಭಯಗ್ರಸ್ತರಾದರು.

### ದೇವರ ಸೂಚಕಕಾರ್ಯಗಳು

12 ಅಪೊಸ್ತಲರು ಅನೇಕ ಸೂಚಕಕಾರ್ಯಗಳನ್ನೂ ಅದ್ಭುತ
ಕಾರ್ಯಗಳನ್ನೂ ಮಾಡಿದರು. ಜನರೆಲ್ಲರೂ ಆ ಕಾರ್ಯ
ಗಳನ್ನು ನೋಡಿದರು. ಅಪೊಸ್ತಲರು ಒಟ್ಟಾಗಿ ಸೊಲೊ
ಮೋನನ ಮಂಟಪದಲ್ಲಿರುತ್ತಿದ್ದರು. ಅವರೆಲ್ಲರ ಉದ್ದೇಶ
ಒಂದೇ ಆಗಿತ್ತು. 13ಅವರೊಂದಿಗೆ ನಿಂತುಕೊಳ್ಳಲು ತಮಗೂ
ಯೋಗ್ಯತೆ ಇದೆಯೆಂದು ಬೇರೆ ಯಾರಿಗೂ ಅನ್ನಿಸಲಿಲ್ಲ. ಜನ
ರೆಲ್ಲರೂ ಅಪೊಸ್ತಲರ ಬಗ್ಗೆ ಒಳ್ಳೆಯ ಸಂಗತಿಗಳನ್ನು ಹೇಳು
ತ್ತಿದ್ದರು. 14ಮತ್ತು ಹೆಚ್ಚುಹೆಚ್ಚು ಜನರು ಪ್ರಭುವನ್ನು ನಂಬಿ
ಕೊಂಡರು. ಅನೇಕ ಸ್ತ್ರೀಯರೂ ಪುರುಷರೂ ವಿಶ್ವಾಸಿಗಳ
ಸಮುದಾಯಕ್ಕೆ ಸೇರುತ್ತಿದ್ದರು. 15ಹೀಗಿರಲು, ಪೇತ್ರನು ದಾರಿ
ಯಲ್ಲಿ ಹೋಗುತ್ತಾನೆಂಬ ಸುದ್ದಿಯನ್ನು ಕೇಳಿದ ಜನರು
ಕಾಯಿಲೆಯವರನ್ನು ಬೀದಿಗಳಿಗೆ ಹೊತ್ತುಕೊಂಡು ಬಂದು
ಹಾಸಿಗೆ ಮತ್ತು ಡೋಲಿಗಳ ಮೇಲೆ ಮಲಗಿಸುತ್ತಿದ್ದರು. ಪೇತ್ರನ
ನೆರಳು ಬಿದ್ದರೆ ಸಾಕು, ಕಾಯಿಲೆಯವರು ಗುಣಮುಖರಾಗುತ್ತಾ
ರೆಂದು ಜನರು ಯೋಚಿಸಿಕೊಂಡಿದ್ದರು. 16ಜೆರುಸಲೇಮಿನ
ಸುತ್ತಮುತ್ತಲಿನ ಊರುಗಳಿಂದೆಲ್ಲಾ ಜನರು ಬರುತ್ತಿದ್ದರು.
ಅವರು ಕಾಯಿಲೆಯವರನ್ನೂ ದೆವ್ವಪೀಡಿತರಾಗಿದ್ದವರನ್ನೂ
ಹೊತ್ತುಕೊಂಡು ಬರುತ್ತಿದ್ದರು. ಈ ಜನರೆಲ್ಲರಿಗೂ
ಗುಣವಾಯಿತು.

### ಅಪೊಸ್ತಲರನ್ನು ತಡೆಯಲು ಯೆಹೂದ್ಯರ ಪ್ರಯತ್ನ

17ಪ್ರಧಾನಯಾಜಕನು ಮತ್ತು ಅವನ ಸ್ನೇಹಿತರೆಲ್ಲರೂ
(ಸದ್ದುಕಾಯರು) ಬಹು ಅಸೂಯೆಗೊಂಡರು. 18ಅವರು
ಅಪೊಸ್ತಲರನ್ನು ಬಂಧಿಸಿ ರಾಜ್ಯಮಟ್ಟದ ಸೆರೆಮನೆಗೆ ಹಾಕಿದರು.
19ಆದರೆ ರಾತ್ರಿಯಲ್ಲಿ ಪ್ರಭುವಿನ ದೂತನೊಬ್ಬನು ಸೆರೆಮನೆಯ
ಬಾಗಿಲುಗಳನ್ನು ತೆರೆದನು. ದೇವದೂತನು ಅಪೊಸ್ತಲರನ್ನು
ಕರೆದುಕೊಂಡು ಹೊರಗೆ ಬಂದು ಅವರಿಗೆ, 20‘‘ಹೋಗಿ ದೇವಾ
ಲಯದಲ್ಲಿ ನಿಂತುಕೊಳ್ಳಿರಿ. ಯೇಸುವಿನಲ್ಲಿರುವ ಈ ಹೊಸ
ಜೀವಿತದ ಬಗ್ಗೆ ಪ್ರತಿಯೊಂದನ್ನೂ ಜನರಿಗೆ ಹೇಳಿರಿ’’ ಎಂದನು.
21ಆದ್ದರಿಂದ ಅವರು ಮರುದಿನ ಮುಂಜಾನೆ ದೇವಾಲಯಕ್ಕೆ
ಹೋಗಿ ಉಪದೇಶ ಮಾಡತೊಡಗಿದರು.

ಪ್ರಧಾನಯಾಜಕನು ಮತ್ತು ಅವನ ಸ್ನೇಹಿತರು ದೇವಾಲ
ಯಕ್ಕೆ ಬಂದರು. ಅವರು ಯೆಹೂದ್ಯನಾಯಕರ ಮತ್ತು
ಇಸ್ರೇಲರಲ್ಲಿ ಪ್ರಮುಖರಾಗಿದ್ದವರ ಸಭೆಯನ್ನು ಸೇರಿಸಿದರು.
ಬಳಿಕ ಅಪೊಸ್ತಲರನ್ನು ತಮ್ಮ ಬಳಿಗೆ ಕರೆದುಕೊಂಡು ಬರಲು
ಕೆಲವರನ್ನು ಸೆರೆಮನೆಗೆ ಕಳುಹಿಸಿದರು. 22ದೇವಾಲಯದ
ಸಿಪಾಯಿಗಳು ಸೆರೆಮನೆಗೆ ಹೋದಾಗ ಅಲ್ಲಿ ಅಪೊಸ್ತಲರನ್ನು
ಕಾಣಲಿಲ್ಲ. ಆದ್ದರಿಂದ ಅವರು ಹಿಂತಿರುಗಿ ಬಂದು ಯೆಹೂದ್ಯ
ನಾಯಕರಿಗೆ, 23‘‘ಸೆರೆಮನೆ ಮುಚ್ಚಿತ್ತು ಮತ್ತು ಬೀಗವನ್ನು
ಹಾಕಲಾಗಿತ್ತು. ಕಾವಲುಗಾರರು ಬಾಗಿಲ ಬಳಿ ನಿಂತು
ಕೊಂಡಿದ್ದರು. ಆದರೆ ನಾವು ಬಾಗಿಲುಗಳನ್ನು ತೆರೆದಾಗ ಸೆರೆ
ಮನೆಯು ಬರಿದಾಗಿತ್ತು!’’ ಎಂದು ತಿಳಿಸಿದರು. 24ದೇವಾಲ
ಯದ ಕಾವಲುಗಾರರ ನಾಯಕನು ಮತ್ತು ಮಹಾಯಾಜಕರು
ಇದನ್ನು ಕೇಳಿ ಗಲಿಬಿಲಿಗೊಂಡರು. ಇದರಿಂದ ಏನಾಗುವುದೋ
ಎಂದು ಅವರು ಭಯಪಟ್ಟರು. 25ಬಳಿಕ ಬೇರೊಬ್ಬನು ಬಂದು
ಅವರಿಗೆ, ‘‘ಕೇಳಿ! ನೀವು ಸೆರೆಮನೆಯಲ್ಲಿ ಹಾಕಿದ್ದ ಜನರು
ದೇವಾಲಯದಲ್ಲಿ ನಿಂತಿದ್ದಾರೆ. ಅವರು ಜನರಿಗೆ ಉಪದೇಶ
ಮಾಡುತ್ತಿದ್ದಾರೆ!’’ ಎಂದು ಹೇಳಿದನು. 26ಆಗ ದಳಪತಿ ಮತ್ತು
ಅವನ ಜನರು ಹೋಗಿ ಅಪೊಸ್ತಲರನ್ನು ಮರಳಿ ಕರೆತಂದರು.

---

**ಲೇವಿಯ** ಲೇವಿ ಕುಲದವನು. ಈ ಕುಲದವರು ದೇವಾಲಯದಲ್ಲಿ
ಯಾಜಕರಿಗೆ ಸಹಾಯಕರಾಗಿದ್ದರು.

ಆದರೆ ಸೈನಿಕರು ಬಲಾತ್ಕಾರ ಮಾಡಲಿಲ್ಲ. ಯಾಕೆಂದರೆ ಅವರು ಜನರಿಗೆ ಭಯಪಟ್ಟರು. ಜನರು ಕೋಪಗೊಂಡು ಕಲ್ಲೆಸೆದು ತಮ್ಮನ್ನು ಕೊಲ್ಲಬಹುದೆಂದು ಅವರು ಹೆದರಿದರು.

27ಸೈನಿಕರು ಅಪೊಸ್ತಲರನ್ನು ಸಭೆಗೆ ಕರೆದುಕೊಂಡು ಬಂದು ಯೆಹೂದ್ಯನಾಯಕರ ಮುಂದೆ ನಿಲ್ಲಿಸಿದರು. ಪ್ರಧಾನ ಯಾಜಕನು ಅಪೊಸ್ತಲರಿಗೆ, 28“ಈ ಮನುಷ್ಯನ (ಯೇಸುವಿನ) ಬಗ್ಗೆ ನೀವು ಬೋಧಿಸಕೂಡದೆಂದು ನಾವು ನಿಮಗೆ ಆಜ್ಞಾಪಿಸಿದೆವು. ಆದರೆ ನೀವು ಮಾಡಿರುವುದೇನು? ನೀವು ಜೆರುಸಲೇಮನ್ನು ನಿಮ್ಮ ಉಪದೇಶದಿಂದ ತುಂಬಿಸಿಬಿಟ್ಟಿದ್ದೀರಿ. ಈ ಮನುಷ್ಯನ (ಯೇಸುವಿನ) ಸಾವಿಗೆ ನಮ್ಮನ್ನೇ ಜವಾಬ್ದಾರರನ್ನಾಗಿ ಮಾಡಲು ನೀವು ಪ್ರಯತ್ನಿಸುತ್ತಿದ್ದೀರಿ” ಎಂದರು.

29ಪೇತ್ರ ಮತ್ತು ಉಳಿದ ಅಪೊಸ್ತಲರು, “ನಾವು ವಿಧೇಯರಾಗಬೇಕಾದದ್ದು ದೇವರಿಗೇ ಹೊರತು ನಿಮಗಲ್ಲ! 30ನೀವು ಯೇಸುವನ್ನು ಕೊಂದಿರಿ. ನೀವು ಆತನನ್ನು ಶಿಲುಬೆಯ ಮೇಲೆ ನೇತು ಹಾಕಿದಿರಿ. ಆದರೆ ದೇವರು ಅಂದರೆ ನಮ್ಮ ಪಿತೃಗಳ ದೇವರೇ ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದನು! 31ದೇವರಿಂದ ಆತನ ಬಲಗಡೆಗೆ ಏರಿಸಲ್ಪಟ್ಟಾತನೇ ಯೇಸು. ಎಲ್ಲಾ ಯೆಹೂದ್ಯರು ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳುವುದರ ಮೂಲಕ ಪಾಪಕ್ಷಮೆ ಹೊಂದಿಕೊಳ್ಳಲೆಂದು ದೇವರು ಯೇಸುವನ್ನು ನಮ್ಮ ನಾಯಕನನ್ನಾಗಿಯೂ ರಕ್ಷಕನನ್ನಾಗಿಯೂ ಮಾಡಿದ್ದಾನೆ. 32ಈ ಘಟನೆಗಳಿಗೆ ನಾವೇ ಸಾಕ್ಷಿಗಳು. ನಾವು ಮಾತ್ರವಲ್ಲದೆ ವಿಧೇಯರಾಗುವ ಎಲ್ಲಾ ಜನರಿಗೆ ದೇವರು ದಯಪಾಲಿಸಿರುವ ಪವಿತ್ರಾತ್ಮನೂ ಸಾಕ್ಷಿಯಾಗಿದ್ದಾನೆ” ಎಂದನು.

33ಯೆಹೂದ್ಯನಾಯಕರು ಈ ಮಾತುಗಳನ್ನು ಕೇಳಿ ಬಹುಕೋಪಗೊಂಡು, ಅಪೊಸ್ತಲರನ್ನು ಕೊಲ್ಲಬೇಕೆಂದಿದ್ದರು.
34ಆಗ ಫರಿಸಾಯರಲ್ಲಿ ಒಬ್ಬನು ಸಭೆಯಲ್ಲಿ ಎದ್ದು ನಿಂತುಕೊಂಡನು. ಅವನ ಹೆಸರು ಗಮಲಿಯೇಲ. ಅವನು ಧರ್ಮೋಪದೇಶಕನಾಗಿದ್ದನು ಮತ್ತು ಜನರೆಲ್ಲಾ ಅವನನ್ನು ಗೌರವಿಸುತ್ತಿದ್ದರು. ಕೆಲವು ನಿಮಿಷಗಳವರೆಗೆ ಅಪೊಸ್ತಲರನ್ನು ಸಭೆಯಿಂದ ಹೊರಗೆ ಕಳುಹಿಸಬೇಕೆಂದು ಅವನು ಜನರಿಗೆ ಹೇಳಿದನು.
35ಬಳಿಕ ಅವನು ಅವರಿಗೆ, “ಇಸ್ರೇಲ್ ಜನರೇ, ನೀವು ಇವರಿಗೆ ಮಾಡಬೇಕೆಂದಿರುವುದರ ಬಗ್ಗೆ ಎಚ್ಚರಿಕೆಯಾಗಿರಿ! 36ಒಮ್ಮೆ, ಥೈದ ಎಂಬವನು ಬಂದದ್ದು ನಿಮ್ಮ ನೆನಪಿನಲ್ಲಿದೆಯೋ? ಅವನು ತನ್ನನ್ನು ಮಹಾಪುರುಷನೆಂದು ಹೇಳಿಕೊಂಡನು. ಸುಮಾರು ನಾನೂರು ಮಂದಿ ಅವನ ಜೊತೆ ಸೇರಿದರು. ಆದರೆ ಅವನು ಕೊಲ್ಲಲ್ಪಟ್ಟನು. ಅವನನ್ನು ಹಿಂಬಾಲಿಸುತ್ತಿದ್ದವರೆಲ್ಲ ಚದರಿ ಓಡಿಹೋದರು. ಅವರಿಂದ ಏನೂ ಮಾಡಲಾಗಲಿಲ್ಲ. 37ಬಳಿಕ, ಯೂದ ಎಂಬವನು ಗಲಿಲಾಯದಿಂದ ಬಂದನು. ಅದು ಜನಗಣತಿಯ ಕಾಲವಾಗಿತ್ತು. ಅವನು ಸಹ ಅನುಯಾಯಿಗಳ ಒಂದು ಗುಂಪನ್ನೇ ಕಟ್ಟಿದ. ಅವನು ಸಹ ಕೊಲ್ಲಲ್ಪಟ್ಟನು. ಅವನ ಅನುಯಾಯಿಗಳೆಲ್ಲಾ ಚದರಿ ಓಡಿಹೋದರು. 38ಆದ್ದರಿಂದ ಈಗ ನಾನು ನಿಮಗೆ ಹೇಳುವುದೇನೆಂದರೆ, ಈ ಜನರಿಂದ ದೂರವಾಗಿರಿ. ಅವರನ್ನು ಅವರಷ್ಟಕ್ಕೇ ಬಿಟ್ಟುಬಿಡಿರಿ. ಅವರ ಯೋಜನೆಯು ಮನುಷ್ಯರಿಂದ ಬಂದದ್ದಾಗಿದ್ದರೆ, ಅದು ಉರುಳಿಹೋಗುವುದು. 39ಆದರೆ ಅದು ದೇವರಿಂದ ಬಂದದ್ದಾಗಿದ್ದರೆ, ನೀವು ಅವರನ್ನು ತಡೆಯಲು ಸಾಧ್ಯವಾಗುವುದಿಲ್ಲ. ನೀವು ದೇವರಿಗೇ ವಿರುದ್ಧವಾಗಿ ಹೋರಾಡಿದಂತಾದೀತು!” ಎಂದು ಹೇಳಿದನು.

ಗಮಲಿಯೇಲನ ಸಲಹೆಗೆ ಯೆಹೂದ್ಯ ನಾಯಕರು ಒಪ್ಪಿಕೊಂಡರು. 40ಅವರು ಅಪೊಸ್ತಲರನ್ನು ಮತ್ತೆ ಒಳಗೆ ಕರೆಸಿ, ಹೊಡೆಸಿ, ಯೇಸುವಿನ ಬಗ್ಗೆ ಜನರಿಗೆ ಹೇಳಕೂಡದೆಂದು ಎಚ್ಚರಿಸಿ ಕಳುಹಿಸಿಬಿಟ್ಟರು. 41ಅಪೊಸ್ತಲರು ಸಭೆಯಿಂದ ಹೊರಟುಹೋದರು. ಯೇಸುವಿನ ಹೆಸರಿಗಾಗಿ ಅಪಮಾನವನ್ನು ಅನುಭವಿಸುವ ಅರ್ಹತೆಯನ್ನು ಪಡೆದುಕೊಂಡೆವೆಂದು ಅವರು ಸಂತೋಷಪಟ್ಟರು. 42ಅವರು ಜನರಿಗೆ ಉಪದೇಶಿಸುವುದನ್ನು ನಿಲ್ಲಿಸಲಿಲ್ಲ. ಯೇಸುವೇ ಕ್ರಿಸ್ತನೆಂಬ ಶುಭವಾರ್ತೆಯನ್ನು ಜನರಿಗೆ ಹೇಳುವುದನ್ನು ಮುಂದುವರಿಸಿದರು. ಅವರು ಪ್ರತಿದಿನ ದೇವಾಲಯದಲ್ಲಿಯೂ ಜನರ ಮನೆಗಳಲ್ಲಿಯೂ ಉಪದೇಶಿಸುತ್ತಿದ್ದರು.

### ವಿಶೇಷ ಕಾರ್ಯಕ್ಕೆ ಏಳು ಮಂದಿಯ ಆಯ್ಕೆ

6 ಯೇಸುವಿನ ಶಿಷ್ಯರ ಸಂಖ್ಯೆಯು ಹೆಚ್ಚುಹೆಚ್ಚಾಗುತ್ತಿತ್ತು. ಆದರೆ ಈ ಸಮಯದಲ್ಲಿ ಗ್ರೀಕ್ ಮಾತಾಡುವ ಶಿಷ್ಯರು ಯೆಹೂದ್ಯ ಶಿಷ್ಯರಿಗೆ ದೂರು ಹೇಳಿದರು. ಪ್ರತಿದಿನ ಶಿಷ್ಯರಿಗೆ ಕೊಡುವಂಥವುಗಳಲ್ಲಿ ತಮ್ಮ ವಿಧವೆಯರಿಗೆ ಅವರ ಪಾಲು ದೊರೆಯುತ್ತಿಲ್ಲವೆಂದು ಅವರು ಆಪಾದಿಸಿದರು. 2ಆಗ ಹನ್ನೆರಡು ಮಂದಿ ಅಪೊಸ್ತಲರು ಇಡೀ ಶಿಷ್ಯಸಮುದಾಯದ ಸಭೆಯನ್ನು ಕರೆದು ಅವರಿಗೆ, “ದೇವರ ವಾಕ್ಯವನ್ನು ಬೋಧಿಸುವುದು ನಮ್ಮ ಕೆಲಸ. ಆದರೆ ಅದು ನಿಂತುಹೋಗುವುದು ಸರಿಯಲ್ಲ! ನಾವು ಜನರಿಗೆ ಊಟವನ್ನು ಒದಗಿಸಲು ಸಹಾಯ ಮಾಡುವುದಕ್ಕಿಂತಲೂ ದೇವರ ವಾಕ್ಯೋಪದೇಶವನ್ನು ಮುಂದುವರಿಸುವುದು ಒಳ್ಳೆಯದು. 3ಆದ್ದರಿಂದ, ಸಹೋದರರೇ, ನಿಮ್ಮ ಜನರಲ್ಲಿ ಏಳು ಮಂದಿಯನ್ನು ಆರಿಸಿಕೊಳ್ಳಿರಿ. ಅವರು ಜನರಿಂದ ಒಳ್ಳೆಯವರು ಎನಿಸಿಕೊಂಡವರಾಗಿರಬೇಕು; ಜ್ಞಾನಪೂರ್ಣರಾಗಿರಬೇಕು ಮತ್ತು ಪವಿತ್ರಾತ್ಮಭರಿತರಾಗಿರಬೇಕು. ನಾವು ಅವರಿಗೆ ಈ ಕೆಲಸವನ್ನು ಒಪ್ಪಿಸಿಕೊಡುತ್ತೇವೆ.
4ಆಗ ನಾವು ನಮ್ಮ ಸಮಯವನ್ನೆಲ್ಲಾ ಪ್ರಾರ್ಥನೆಗೂ ದೇವರ ವಾಕ್ಯೋಪದೇಶಕ್ಕೂ ಕೊಡಲು ಸಾಧ್ಯವಾಗುತ್ತದೆ” ಎಂದು ಹೇಳಿದರು.

5ಇಡೀ ಸಮುದಾಯವು ಈ ಆಲೋಚನೆಯನ್ನು ಇಷ್ಟಪಟ್ಟಿತು. ಆದ್ದರಿಂದ ಅವರು ಈ ಏಳು ಮಂದಿಯನ್ನು ಆರಿಸಿಕೊಂಡರು: ಸ್ತೆಫನ (ಮಹಾನಂಬಿಕೆಯುಳ್ಳ ಮತ್ತು ಪವಿತ್ರಾತ್ಮಭರಿತನಾಗಿದ್ದ ಮನುಷ್ಯ), ಫಿಲಿಪ್ಪ* ಪ್ರೊಖೋರ, ನಿಕನೋರ, ತಿಮೋನ, ಪರ್ಮೇನ ಮತ್ತು ನಿಕೊಲಾಯ (ಮತಾಂತರ ಹೊಂದಿ ಯೆಹೂದ್ಯನಾಗಿದ್ದ ಇವನು ಅಂತಿಯೋಕ್ಯಕ್ಕೆ ಸೇರಿದವನು.) 6 ಬಳಿಕ ಅವರು ಈ ಏಳು ಮಂದಿಯನ್ನು ಅಪೊಸ್ತಲರ ಮುಂದೆ ನಿಲ್ಲಿಸಿದರು. ಅಪೊಸ್ತಲರು ಪ್ರಾರ್ಥಿಸಿ, ಅವರ ತಲೆಗಳ ಮೇಲೆ ತಮ್ಮ ಕೈಗಳನ್ನಿಟ್ಟರು.

7ದೇವರ ವಾಕ್ಯವು ಹೆಚ್ಚುಹೆಚ್ಚು ಜನರಿಗೆ ತಲುಪತೊಡಗಿತು. ಜೆರುಸಲೇಮಿನ ಶಿಷ್ಯ ಸಮುದಾಯವು ಹೆಚ್ಚುಹೆಚ್ಚು ದೊಡ್ಡದಾಗತೊಡಗಿತು. ಅನೇಕ ಯೆಹೂದ್ಯಯಾಜಕರು ನಂಬಿಕೊಂಡರು ಮತ್ತು ವಿಧೇಯರಾದರು.

---

**ಫಿಲಿಪ್ಪ** ಯೇಸುವಿನ ಅಪೊಸ್ತಲನಲ್ಲ.

### ಯೆಹೂದ್ಯರು ಸ್ತೆಫನನಿಗೆ ವಿರುದ್ಧವಾದರು

8ಸ್ತೆಫನನು (ಏಳು ಮಂದಿಯಲ್ಲಿ ಒಬ್ಬನು)ದೇವರ ಕೃಪೆ
ಯಿಂದಲೂ ಬಲದಿಂದಲೂ ತುಂಬಿದವನಾಗಿ ಅದ್ಭುತಕಾರ್ಯ
ಗಳನ್ನು ಮತ್ತು ಸೂಚಕಕಾರ್ಯಗಳನ್ನು ಮಾಡುತ್ತಾ ಇದ್ದನು.
9ಆದರೆ ಕೆಲವು ಯೆಹೂದ್ಯರು ಬಂದು ಅವನೊಂದಿಗೆ ವಾದಿಸಿ
ದರು. ಈ ಯೆಹೂದ್ಯರು ಸಭಾಮಂದಿರಕ್ಕೆ ಸೇರಿದವರು. ಅದಕ್ಕೆ
'ಬಿಡುಗಡೆ ಹೊಂದಿದವರ* ಸಭಾಮಂದಿರ' ಎಂದು ಕರೆಯು
ತ್ತಿದ್ದರು. (ಸಿರೇನ್ ಮತ್ತು ಅಲೆಕ್ಸಾಂಡ್ರಿಯದಿಂದ ಬಂದ
ಯೆಹೂದ್ಯರಿಗೋಸ್ಕರವಾಗಿಯೂ ಈ ಸಭಾಮಂದಿರವಿತ್ತು.)
ಸಿಲಿಸಿಯ ಮತ್ತು ಏಷ್ಯಾದಿಂದ ಬಂದ ಯೆಹೂದ್ಯರೂ ಅವ
ರೊಂದಿಗಿದ್ದರು. ಅವರೆಲ್ಲರೂ ಬಂದು ಅವನೊಂದಿಗೆ ವಾದ
ಮಾಡಿದರು. 10ಆದರೆ ವಿವೇಕದಿಂದ ಮಾತಾಡಲು
ಪವಿತ್ರಾತ್ಮನು ಅವನಿಗೆ ಸಹಾಯಮಾಡಿದನು. ಸ್ತೆಫನನ ಮಾತು
ಗಳು ಬಹು ಶಕ್ತಿಯುತವಾಗಿದ್ದ ಕಾರಣ ಅವನೊಂದಿಗೆ
ವಾದಿಸಲು ಅವರಿಗೆ ಸಾಧ್ಯವಾಗದೆ, 11"ಸ್ತೆಫನನು ಮೋಶೆಗೂ
ದೇವರಿಗೂ ವಿರುದ್ಧವಾಗಿ ಕೆಟ್ಟ ಸಂಗತಿಗಳನ್ನು ಹೇಳುತ್ತಾನೆ;
ಅವನ್ನು ನಾವೇ ಕೇಳಿದ್ದೇವೆ!" ಎಂದು ತಿಳಿಸುವಂತೆ ಕೆಲವರಿಗೆ
ಹಣಕೊಟ್ಟರು. 12ಹೀಗೆ ಈ ಯೆಹೂದ್ಯರು ಜನರನ್ನೂ
ಯೆಹೂದ್ಯರ ಹಿರಿಯ ನಾಯಕರನ್ನೂ ಧರ್ಮೋಪದೇಶಕ
ರನ್ನೂ ಗಲಿಬಿಲಿಗೊಳಿಸಿದರು. ಅವರು ಬಹು ಸಿಟ್ಟಿನಿಂದ ಬಂದು
ಸ್ತೆಫನನನ್ನು ಬಂಧಿಸಿ ಯೆಹೂದ್ಯನಾಯಕರ ಸಭೆಗೆ
ಕೊಂಡೊಯ್ದರು. 13ಈ ಯೆಹೂದ್ಯರು ಕೆಲವು ಮಂದಿ ಸುಳ್ಳು
ಸಾಕ್ಷಿಗಳನ್ನು ಕರೆದುಕೊಂಡು ಬಂದು, "ಈ ಮನುಷ್ಯನು ಈ
ಪವಿತ್ರ ಸ್ಥಳದ (ದೇವಾಲಯದ) ವಿರುದ್ಧವಾಗಿಯೂ
ಮೋಶೆಯ ಧರ್ಮಶಾಸ್ತ್ರದ ವಿರುದ್ಧವಾಗಿಯೂ ಕೆಟ್ಟಸಂಗತಿ
ಗಳನ್ನು ಯಾವಾಗಲೂ ಹೇಳುತ್ತಾನೆ. 14ನಜರೇತಿನ ಯೇಸು ಈ
ದೇವಾಲಯವನ್ನು ಕೆಡವಿ ಮೋಶೆಯ ವಿಧಿಗಳನ್ನು ಬದಲಾ
ಯಿಸುತ್ತಾನೆಂದು ಇವನು ಹೇಳುವುದನ್ನು ನಾವು ಕೇಳಿದ್ದೇವೆ"
ಎಂದು ಹೇಳಿಸಿದರು. 15ಸಭೆಯಲ್ಲಿ ಕುಳಿತಿದ್ದವರೆಲ್ಲರೂ
ಸ್ತೆಫನನ ಮುಖವನ್ನು ದಿಟ್ಟಿಸಿ ನೋಡಲು ಅವನ ಮುಖವು ದೇವ
ದೂತನ ಮುಖದಂತೆ ಕಂಗೊಳಿಸಿತು.

### ಸ್ತೆಫನನ ಪ್ರಸಂಗ

7 ಪ್ರಧಾನಯಾಜಕನು ಸ್ತೆಫನನಿಗೆ, "ಈ ಸಂಗತಿಗಳು
ನಿಜವೋ?" ಎಂದು ಕೇಳಿದನು. 2ಪ್ರತ್ಯುತ್ತರವಾಗಿ
ಅವನು ಹೀಗೆಂದನು: "ನನ್ನ ಯೆಹೂದ್ಯತಂದೆಗಳೇ, ಸಹೋ
ದರರೇ, ನನಗೆ ಕಿವಿಗೊಡಿರಿ. ನಮ್ಮ ಪಿತೃವಾದ ಅಬ್ರಹಾಮನಿಗೆ
ನಮ್ಮ ಪ್ರಭಾವಸ್ವರೂಪನಾದ ದೇವರು ಕಾಣಿಸಿಕೊಂಡನು.
ಅಬ್ರಹಾಮನು ಹಾರಾನಿನಲ್ಲಿ ವಾಸಮಾಡುವ ಮೊದಲು
ಮೆಸಪೊಟೊಮಿಯದಲ್ಲಿದ್ದನು. 3ದೇವರು ಅಬ್ರಹಾಮನಿಗೆ,
'ನಿನ್ನ ದೇಶವನ್ನೂ ನಿನ್ನ ಜನರನ್ನೂ ಬಿಟ್ಟು ನಾನು ನಿನಗೆ
ತೋರಿಸುವ ದೇಶಕ್ಕೆ ಹೋಗು'* ಎಂದು ಹೇಳಿದನು. 4ಆದ್ದ
ರಿಂದ ಅಬ್ರಹಾಮನು ಖಾಲ್ದೆಯ* ದೇಶವನ್ನು ಬಿಟ್ಟು ಹಾರಾನಿ
ನಲ್ಲಿ ವಾಸಿಸಲು ಹೋದನು. ಅಬ್ರಹಾಮನ ತಂದೆ ಸತ್ತ ಮೇಲೆ
ದೇವರು ಅವನನ್ನು ಈಗ ನೀವು ವಾಸಿಸುತ್ತಿರುವ ಈ ಸ್ಥಳಕ್ಕೆ
ಕಳುಹಿಸಿದನು. 5ಆದರೆ ದೇವರು ಅಬ್ರಹಾಮನಿಗೆ ಇಲ್ಲಿ ಯಾವ
ಭೂಮಿಯನ್ನೂ ಕೊಡಲಿಲ್ಲ. ದೇವರು ಅವನಿಗೆ ಒಂದು ಅಡಿ
ಸ್ಥಳವನ್ನೂ ಕೊಡಲಿಲ್ಲ. ಆದರೆ ಮುಂದಿನ ಕಾಲದಲ್ಲಿ ಈ
ನಾಡನ್ನು ಅವನಿಗೂ ಅವನ ಮಕ್ಕಳಿಗೂ ಕೊಡುವುದಾಗಿ
ದೇವರು ಅಬ್ರಹಾಮನಿಗೆ ವಾಗ್ದಾನ ಮಾಡಿದನು.
(ಅಬ್ರಹಾಮನಿಗೆ ಮಕ್ಕಳೇ ಇಲ್ಲದಿದ್ದಾಗ ಇದಾಯಿತು.)
6ದೇವರು ಅವನಿಗೆ, 'ನಿನ್ನ ಸಂತಾನದವರು ಬೇರೊಂದು
ದೇಶದಲ್ಲಿ ವಾಸಿಸುವರು. ಅವರು ಪರದೇಶಿಗಳಾಗಿರುವರು.
ಅಲ್ಲಿಯ ಜನರು ಅವರನ್ನು ಗುಲಾಮರನ್ನಾಗಿ ಮಾಡಿಕೊಂಡು
ನಾನೂರು ವರ್ಷಗಳವರೆಗೆ ಅವರಿಗೆ ಕೇಡುಗಳನ್ನು
ಮಾಡುವರು. 7ಆದರೆ ಅವರನ್ನು ಗುಲಾಮರನ್ನಾಗಿ
ಮಾಡಿಕೊಂಡ ಜನಾಂಗವನ್ನು ನಾನು ದಂಡಿಸುವೆನು'* ಎಂದು
ಹೇಳಿದನು. ಇದಲ್ಲದೆ ದೇವರು ಅವನಿಗೆ, 'ಆ ಬಳಿಕ ನಿನ್ನ ಜನರು
ಆ ದೇಶದಿಂದ ಹೊರಗೆ ಬಂದು ನನ್ನನ್ನು ಈ ಸ್ಥಳದಲ್ಲಿ
ಆರಾಧಿಸುವರು'* ಎಂದು ಹೇಳಿದನು. 8ದೇವರು ಅಬ್ರಹಾಮ
ನೊಂದಿಗೆ ಒಂದು ಒಪ್ಪಂದವನ್ನು ಮಾಡಿಕೊಂಡನು. ಆ
ಒಪ್ಪಂದದ ಗುರುತೇ ಸುನ್ನತಿ. ಹೀಗಿರಲು ಅಬ್ರಹಾಮನು ಒಬ್ಬ
ಮಗನನ್ನು ಪಡೆದಾಗ, ಆ ಮಗನಿಗೆ ಎಂಟನೆಯ ದಿನದಲ್ಲಿ ಸುನ್ನತಿ
ಮಾಡಿದನು. ಅವನ ಮಗನ ಹೆಸರು ಇಸಾಕ. ಇಸಾಕನು ಸಹ
ತನ್ನ ಮಗನಾದ ಯಾಕೋಬನಿಗೆ ಸುನ್ನತಿ ಮಾಡಿದನು, ಮತ್ತು
ಯಾಕೋಬನು ತನ್ನ ಗಂಡುಮಕ್ಕಳಿಗೆಲ್ಲಾ ಸುನ್ನತಿ ಮಾಡಿದನು.
ಈ ಗಂಡುಮಕ್ಕಳೇ ಮುಂದೆ ಹನ್ನೆರಡು ಮಂದಿ ಪಿತೃಗಳಾದರು.
9"ಈ ಪಿತೃಗಳು ಯೋಸೇಫನ (ಅವರ ತಮ್ಮ) ಮೇಲೆ
ಹೊಟ್ಟೆಕಿಚ್ಚುಪಟ್ಟರು. ಅವರು ಯೋಸೇಫನನ್ನು ಈಜಿಪ್ಟಿನ
ಜನರಿಗೆ ಗುಲಾಮನನ್ನಾಗಿ ಮಾರಿದರು. ಆದರೆ ದೇವರು
ಯೋಸೇಫನೊಂದಿಗೆ ಇದ್ದನು. 10ಯೋಸೇಫನಿಗೆ ಅಲ್ಲಿ ಅನೇಕ
ತೊಂದರೆಗಳು ಬಂದವು. ಆದರೆ ದೇವರು ಆ ಎಲ್ಲಾ ತೊಂದರೆ
ಗಳಿಂದ ಅವನನ್ನು ರಕ್ಷಿಸಿದನು. ಆಗ ಫರೋಹನು ಈಜಿಪ್ಟಿನ
ರಾಜನಾಗಿದ್ದನು. ದೇವರು ಯೋಸೇಫನಿಗೆ ಕೊಟ್ಟ ಜ್ಞಾನದ ದೆಸೆ
ಯಿಂದ ಫರೋಹನು ಯೋಸೇಫನನ್ನು ಇಷ್ಟಪಟ್ಟನು ಮತ್ತು
ಗೌರವಿಸಿದನು. ಫರೋಹನು ಯೋಸೇಫನನ್ನು ಈಜಿಪ್ಟಿನ
ರಾಜ್ಯಪಾಲನನ್ನಾಗಿಯೂ ತನ್ನ ಮನೆಯಲ್ಲಿದ್ದ ಎಲ್ಲಾ ಜನರ
ಮೇಲೆ ಅಧಿಪತಿಯನ್ನಾಗಿಯೂ ಮಾಡಿದನು.11ಆದರೆ ಈಜಿಪ್ಟಿ
ನಲ್ಲಿ ಮತ್ತು ಕಾನಾನಿನಲ್ಲಿ ಬರಗಾಲ ಉಂಟಾಯಿತು. ಆಹಾರ
ವಿಲ್ಲದೆ ನಮ್ಮ ಪಿತೃಗಳಿಗೆ ಬಹಳ ಕಷ್ಟವಾಯಿತು. 12ಆದರೆ
ಈಜಿಪ್ಟಿನಲ್ಲಿ ಆಹಾರವನ್ನು ಸಂಗ್ರಹಿಸಲಾಗಿದೆ ಎಂಬ ಸುದ್ದಿ
ಯನ್ನು ಯಾಕೋಬನು ಕೇಳಿ, ನಮ್ಮ ಪಿತೃಗಳನ್ನು ಅಲ್ಲಿಗೆ
ಕಳುಹಿಸಿದನು. (ಇದು ಈಜಿಪ್ಟಿಗೆ ಅವರ ಮೊದಲ ಪ್ರಯಾಣ.)
13ಬಳಿಕ ಅವರು ಅಲ್ಲಿಗೆ ಎರಡನೆಯ ಸಲ ಹೋದರು. ಈ ಸಲ,
ತಾನು ಯಾರೆಂಬುದನ್ನು ಯೋಸೇಫನು ತನ್ನ ಸಹೋದರರಿಗೆ
ತಿಳಿಸಿದನು ಮತ್ತು ಯೋಸೇಫನ ಕುಟುಂಬದ ಬಗ್ಗೆ ಫರೋಹ
ನಿಗೆ ತಿಳಿಯಿತು. 14ಬಳಿಕ, ಯೋಸೇಫನು ತನ್ನ ತಂದೆಯಾದ
ಯಾಕೋಬನನ್ನು ಮತ್ತು ಸಂಬಂಧಿಕರನ್ನು (ಅವರೆಲ್ಲರು

**ಬಿಡುಗಡೆ ಹೊಂದಿದವರ** ಒಮ್ಮೆ ಗುಲಾಮರಾಗಿದ್ದು ಬಿಡುಗಡೆ ಹೊಂದಿದ ಯೆಹೂದ್ಯರು.

**ನಿನ್ನ .. ಹೋಗು** ಆದಿಕಾಂಡ 12:1

**ಖಾಲ್ದೆಯ** ಅಥವಾ ಬಾಬಿಲೋನಿಯ.

**ನಿನ್ನ .. ದಂಡಿಸುವೆನು** ಆದಿಕಾಂಡ 15:13-14

**ಆ ಬಳಿಕ ... ಆರಾಧಿಸುವರು** ಆದಿಕಾಂಡ15:14; ವಿಮೋಚನ. 3:12.

ಒಟ್ಟಿಗೆ ಎಪ್ಪತ್ತೈದು ಮಂದಿ) ಈಜಿಪ್ಟಿಗೆ ಆಹ್ವಾನಿಸಲು ಕೆಲವು
ಜನರನ್ನು ಕಳುಹಿಸಿದನು. 15ಆದ್ದರಿಂದ ಯಾಕೋಬನು
ಈಜಿಪ್ಟಿಗೆ ಹೋದನು. ಯಾಕೋಬನು ಮತ್ತು ನಮ್ಮ ಪಿತೃಗಳು
ತಾವು ಸಾಯುವವರೆಗೆ ಅಲ್ಲೇ ಇದ್ದರು. 16ಬಳಿಕ ಅವರ
ದೇಹಗಳನ್ನು ಶೇಕೆಮಿಗೆ ಸಾಗಿಸಲಾಯಿತು. ಅಲ್ಲಿಯ ಸಮಾಧಿ
ಯೊಂದರಲ್ಲಿ ಅವರನ್ನು ಹೂಳಲಾಯಿತು. (ಅಬ್ರಹಾಮನು
ಹಾಮೋರನ ಗಂಡುಮಕ್ಕಳಿಂದ ಕೊಂಡುಕೊಂಡದ್ದು ಈ
ಸಮಾಧಿಯನ್ನೇ. ಅವನು ಅವರಿಗೆ ಬೆಳ್ಳಿಯನ್ನು ಕ್ರಯವಾಗಿ
ಕೊಟ್ಟಿದ್ದನು.)

17“ಈಜಿಪ್ಟಿನಲ್ಲಿ ನಮ್ಮ ಜನರಾದ ಯೆಹೂದ್ಯರ ಸಂಖ್ಯೆಯು
ಹೆಚ್ಚತೊಡಗಿತು. (ದೇವರು ಅಬ್ರಹಾಮನಿಗೆ ವಾಗ್ದಾನ
ಮಾಡಿದ ಕಾಲ ಬಹು ಶೀಘ್ರದಲ್ಲೇ ಬರಲಿತ್ತು). 18ಬಳಿಕ,
ಬೇರೊಬ್ಬ ರಾಜನು ಈಜಿಪ್ಟನ್ನು ಆಳಲಾರಂಭಿಸಿದನು. ಅವನಿಗೆ
ಯೋಸೇಫನ ಬಗ್ಗೆ ಏನೂ ತಿಳಿದಿರಲಿಲ್ಲ. 19ಈ ರಾಜನು ನಮ್ಮ
ಜನರಿಗೆ ಮೋಸ ಮಾಡಿದನು. ಅವನು ನಮ್ಮ ಪಿತೃಗಳಿಗೆ ಕೇಡನ್ನು
ಮಾಡಿದನು. ಅವರ ಕೂಸುಗಳನ್ನು ಸಾಯಿಸಬೇಕೆಂದು ಹೊರಗೆ
ಹಾಕಿಸಿದನು. 20ಮೋಶೆಯು ಜನಿಸಿದ್ದು ಈ ಕಾಲದಲ್ಲೇ. ಅವನು
ಬಹು ಸುಂದರನಾಗಿದ್ದನು. ಮೋಶೆಯನ್ನು ಅವನ ತಂದೆಯ
ಮನೆಯಲ್ಲಿ ಮೂರು ತಿಂಗಳವರೆಗೆ ನೋಡಿಕೊಳ್ಳಲಾಯಿತು.
21ಅವರು ಮೋಶೆಯನ್ನು ಹೊರಗೆ ಹಾಕಿದಾಗ ಫರೋಹನ
ಮಗಳು ಅವನನ್ನು ತೆಗೆದುಕೊಂಡಳು. ಆಕೆಯು ಅವನನ್ನು ತನ್ನ
ಸ್ವಂತ ಮಗನಂತೆ ಬೆಳೆಸಿದಳು. 22ಈಜಿಪ್ಟಿನವರು ತಮಗೆ ಗೊತ್ತಿದ್ದ
ಸಕಲ ವಿದ್ಯೆಗಳನ್ನು ಮೋಶೆಗೆ ಕಲಿಸಿದರು. ಅವನು ವಿಷಯ
ಗಳನ್ನು ಹೇಳುವುದರಲ್ಲಿಯೂ ಕಾರ್ಯಗಳನ್ನು ಮಾಡುವುದ
ರಲ್ಲಿಯೂ ಬಹು ಸಮರ್ಥನಾಗಿದ್ದನು.

23“ಮೋಶೆಗೆ ನಲವತ್ತು ವರ್ಷ ವಯಸ್ಸಾಗಿದ್ದಾಗ, ತನ್ನ
ಸಹೋದರರಾದ ಯೆಹೂದ್ಯ ಜನರನ್ನು ಸಂದರ್ಶಿಸುವುದು
ಒಳ್ಳೆಯದೆಂದು ಯೋಚಿಸಿಕೊಂಡನು. 24ಈಜಿಪ್ಟಿನವನೊಬ್ಬನು
ಯೆಹೂದ್ಯನೊಬ್ಬನಿಗೆ ಅನ್ಯಾಯ ಮಾಡಿ ಹಿಂಸಿಸುತ್ತಿರುವುದನ್ನು
ಕಂಡ ಮೋಶೆಯು ಆ ಈಜಿಪ್ಟಿನವನಿಗೆ ಬಲವಾಗಿ ಹೊಡೆದು
ಕೊಂದುಹಾಕಿದನು. 25ತಮ್ಮನ್ನು ರಕ್ಷಿಸಲು ದೇವರು ಮೋಶೆ
ಯನ್ನು ಉಪಯೋಗಿಸುತ್ತಿದ್ದಾನೆ ಎಂಬುದಾಗಿ ತನ್ನ ಯೆಹೂದ್ಯ
ಸಹೋದರರು ಅರ್ಥಮಾಡಿಕೊಳ್ಳುತ್ತಾರೆ ಎಂದು ಮೋಶೆ
ಭಾವಿಸಿಕೊಂಡನು. ಆದರೆ ಅವರು ಅರ್ಥಮಾಡಿಕೊಳ್ಳಲಿಲ್ಲ.
26ಮರುದಿನ, ಇಬ್ಬರು ಯೆಹೂದ್ಯರು ಹೊಡೆದಾಡುವುದನ್ನು
ಮೋಶೆಯು ಕಂಡನು. ಅವರನ್ನು ಸಮಾಧಾನಪಡಿಸಲು ಅವನು
ಪ್ರಯತ್ನಿಸಿ ‘ಗೆಳೆಯರೇ, ನೀವು ಸಹೋದರರಾಗಿದ್ದೀರಿ! ನೀವು
ಒಬ್ಬರಿಗೊಬ್ಬರು ಅನ್ಯಾಯ ಮಾಡುವುದೇಕೆ?’ ಎಂದು
ಅವರನ್ನು ಕೇಳಿದನು, 27ಮತ್ತೊಬ್ಬನಿಗೆ ಅನ್ಯಾಯ ಮಾಡು
ತ್ತಿದ್ದವನು ಮೋಶೆಯನ್ನು ಹಿಂದಕ್ಕೆ ತಳ್ಳಿ ‘ನಿನ್ನನ್ನು ನಮ್ಮ ಅಧಿಪತಿ
ಎಂದಾಗಲಿ ನ್ಯಾಯಾಧೀಶ ಎಂದಾಗಲಿ ಯಾರಾದರೂ ಹೇಳಿ
ದರೇ? ಇಲ್ಲ! 28ನಿನ್ನೆ ಆ ಈಜಿಪ್ಟಿನವನನ್ನು ಕೊಂದಂತೆ ನನ್ನನ್ನೂ
ಕೊಲ್ಲುವೆಯಾ?’* ಎಂದು ಹೇಳಿದನು. 29ಇದನ್ನು ಕೇಳಿದ್ದೇ
ಮೋಶೆಯು ಈಜಿಪ್ಟನ್ನು ಬಿಟ್ಟು ಮಿದ್ಯಾನ್ಯರ ನಾಡಿಗೆ ಹೋಗಿ
ವಿದೇಶಿಯವನಂತೆ ವಾಸಿಸತೊಡಗಿದನು. ಅಲ್ಲಿ ಅವನಿಗೆ ಇಬ್ಬರು
ಗಂಡುಮಕ್ಕಳು ಹುಟ್ಟಿದರು.

30“ನಲವತ್ತು ವರ್ಷಗಳಾದ ಮೇಲೆ ಮೋಶೆಯು
ಸಿನಾಯ್ ಬೆಟ್ಟದ ಸಮೀಪದಲ್ಲಿರುವ ಮರಳುಗಾಡಿನಲ್ಲಿದ್ದಾಗ
ಉರಿಯುತ್ತಿದ್ದ ಪೊದೆಯ ಜ್ವಾಲೆಯಲ್ಲಿ ದೇವದೂತನೊಬ್ಬನು
ಕಾಣಿಸಿಕೊಂಡನು. 31ಮೋಶೆಯು ಆಶ್ಚರ್ಯದಿಂದ
ನೋಡಲು ಸಮೀಪಕ್ಕೆ ಹೋದನು. ಆಗ ಮೋಶೆಗೆ ವಾಣಿ
ಯೊಂದು ಕೇಳಿಸಿತು. ಅದು ಪ್ರಭುವಿನ ವಾಣಿಯಾಗಿತ್ತು.
32ಪ್ರಭುವು ಅವನಿಗೆ, ‘ನಾನೇ ನಿನ್ನ ಪಿತೃಗಳ ದೇವರು. ನಾನೇ
ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು
ಯಾಕೋಬನ ದೇವರು’* ಎಂದು ಹೇಳಿದನು. ಮೋಶೆಯು
ಭಯದಿಂದ ನಡುಗ ತೊಡಗಿದನು; ಪೊದೆಯನ್ನು ನೋಡಲು
ಹೆದರಿದನು. 33ಪ್ರಭುವು ಅವನಿಗೆ, ‘ನಿನ್ನ ಪಾದರಕ್ಷೆಗಳನ್ನು
ತೆಗೆದುಹಾಕು, ಈಗ ನೀನು ನಿಂತುಕೊಂಡಿರುವ ಸ್ಥಳ ಪರಿಶುದ್ಧ
ವಾದದ್ದು.

34ಜನರು ಈಜಿಪ್ಟಿನಲ್ಲಿ ಬಹಳ ಸಂಕಟಪಡುತ್ತಿರುವುದನ್ನು
ನಾನು ನೋಡಿದ್ದೇನೆ; ನನ್ನ ಜನರ ಗೋಳಾಟವನ್ನು ನಾನು
ಕೇಳಿದ್ದೇನೆ. ನಾನು ಅವರನ್ನು ರಕ್ಷಿಸುವುದಕ್ಕಾಗಿ ಇಳಿದು ಬಂದಿ
ದ್ದೇನೆ. ಮೋಶೆಯೇ, ಈಗ ನಾನು ನಿನ್ನನ್ನು ಈಜಿಪ್ಟಿಗೆ ಕಳುಹಿಸು
ತ್ತಿದ್ದೇನೆ’* ಎಂದು ಹೇಳಿದನು.

35“ಆ ಯೆಹೂದ್ಯರಿಂದ ತಿರಸ್ಕೃತನಾದವನೇ ಈ ಮೋಶೆ.
ಅವರು ಅವನಿಗೆ ‘ನಿನ್ನನ್ನು ನಮ್ಮ ಅಧಿಪತಿ ಎಂದಾಗಲಿ ನ್ಯಾಯಾ
ಧೀಶ ಎಂದಾಗಲಿ ನಿನಗೆ ಯಾರಾದರೂ ಹೇಳಿದರೇ?’ ಎಂದು
ಪ್ರಶ್ನಿಸಿದ್ದರು. ಆದರೆ ದೇವರು ಅಧಿಪತಿಯನ್ನಾಗಿಯೂ
ವಿಮೋಚಕನನ್ನಾಗಿಯೂ ಕಳುಹಿಸಿದ್ದು ಆ ಮೋಶೆಯನ್ನೇ.
ದೇವರು ತನ್ನ ದೂತನ ಮೂಲಕವಾಗಿ ಮೋಶೆಯನ್ನು ಕಳುಹಿ
ಸಿದನು. ಉರಿಯುವ ಪೊದೆಯಲ್ಲಿ ಮೋಶೆಯು ಕಂಡದ್ದು ಈ
ದೇವದೂತನನ್ನೇ. 36ಆದ್ದರಿಂದ ಮೋಶೆಯು ಜನರನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದನು. ಅವನು ಸೂಚಕ
ಕಾರ್ಯಗಳನ್ನು ಅದ್ಭುತಕಾರ್ಯಗಳನ್ನು ಈಜಿಪ್ಟಿನಲ್ಲಿಯೂ
ಕೆಂಪು ಸಮುದ್ರದಲ್ಲಿಯೂ ಮತ್ತು ನಲವತ್ತು ವರ್ಷಗಳ ಕಾಲ
ಅರಣ್ಯದಲ್ಲಿಯೂ ಮಾಡಿದನು. 37ಈ ಮೋಶೆಯೇ ಯೆಹೂದ್ಯ
ಜನರಿಗೆ, ‘ದೇವರು ನಿಮಗೊಬ್ಬ ಪ್ರವಾದಿಯನ್ನು ಕೊಡುವನು.
ಆ ಪ್ರವಾದಿಯು ನಿಮ್ಮ ಸ್ವಜನರ ಮಧ್ಯದಿಂದಲೇ ಬರುವನು.
ಅವನು ನನ್ನಂತೆಯೇ ಇರುವನು’* ಎಂದು ಹೇಳಿದನು.
38ಅರಣ್ಯದಲ್ಲಿ ಯೆಹೂದ್ಯರ ಸಮೂಹದೊಂದಿಗೆ ಇದ್ದವನು ಈ
ಮೋಶೆಯೇ. ಸಿನಾಯ್ ಬೆಟ್ಟದ ಬಳಿ ತನ್ನೊಂದಿಗೆ ಮಾತಾಡಿದ
ದೇವದೂತನೊಂದಿಗೆ ಅವನಿದ್ದನು. ಅಲ್ಲದೆ ಅವನು ನಮ್ಮ ಪಿತೃ
ಗಳೊಂದಿಗೆ ಇದ್ದನು. ಜೀವಕರವಾದ ಆಜ್ಞೆಗಳನ್ನು ಮೋಶೆಯು
ದೇವರಿಂದ ಸ್ವೀಕರಿಸಿಕೊಂಡು ಅವುಗಳನ್ನು ನಮಗೆ ಕೊಟ್ಟನು.

39“ಆದರೆ ಮೋಶೆಗೆ ವಿಧೇಯರಾಗಲು ನಮ್ಮ ಪಿತೃಗಳಿಗೆ
ಇಷ್ಟವಿರಲಿಲ್ಲ. ಅವರು ಅವನನ್ನು ತಿರಸ್ಕರಿಸಿ, ಈಜಿಪ್ಟಿಗೆ ಹಿಂತಿ
ರುಗಬೇಕೆಂದಿದ್ದರು. 40ನಮ್ಮ ಪಿತೃಗಳು ಆರೋನನಿಗೆ,
‘ಮೋಶೆಯು ನಮ್ಮನ್ನು ಈಜಿಪ್ಟ್ ದೇಶದಿಂದ ಕರೆದುಕೊಂಡು
ಬಂದನು. ಆದರೆ ಅವನಿಗೆ ಏನಾಯಿತೋ ನಮಗೆ ಗೊತ್ತಿಲ್ಲ.

---

**ನೀನು ... ಕೊಲ್ಲುವೆಯಾ** ವಿಮೋಚನ. 2:14

**ನಾನೇ ... ದೇವರು** ವಿಮೋಚನ 3:6.

**ನಿನ್ನ ... ಕಳುಹಿಸುತ್ತಿದ್ದೇನೆ** ವಿಮೋಚನಕಾಂಡ 3:5-10

**ದೇವರು ... ಇರುವನು** ಧರ್ಮೋಪದೇಶ. 18:15.

ಆದ್ದರಿಂದ ನಮ್ಮ ಮುಂದೆ ಹೋಗಲು ಮತ್ತು ನಮ್ಮನ್ನು ನಡೆಸಲು ಕೆಲವು ದೇವರುಗಳನ್ನು ಮಾಡು'* ಎಂದರು. [41]ಆದ್ದ ರಿಂದ ಆ ಜನರು ಕರುವಿನಾಕೃತಿಯಲ್ಲಿ ಒಂದು ವಿಗ್ರಹವನ್ನು ಮಾಡಿ, ಅದಕ್ಕೆ ಯಜ್ಞಗಳನ್ನು ಅರ್ಪಿಸಿದರು. ಆ ಜನರು ತಮ್ಮ ಕೈಯಾರೆ ಮಾಡಿಕೊಂಡ ವಿಗ್ರಹದ ವಿಷಯದಲ್ಲಿ ಬಹು ಸಂತೋಷಪಟ್ಟರು! [42]ಆದರೆ ದೇವರು ಅವರಿಗೆ ವಿರೋಧ ವಾದನು. ಆಕಾಶದ ಸುಳ್ಳುದೇವರುಗಳ ಗಣವನ್ನು ಪೂಜಿಸದಂತೆ ಅವರನ್ನು ತಡೆಯಲು ತಾನು ಮಾಡುತ್ತಿದ್ದ ಪ್ರಯತ್ನವನ್ನು ದೇವರು ನಿಲ್ಲಿಸಿದನು. ಇದರ ಬಗ್ಗೆ ಪ್ರವಾದಿಗಳ ಪುಸ್ತಕದಲ್ಲಿ ಹೀಗೆ ಬರೆದಿದೆ: ದೇವರು ಇಂತೆನ್ನುತ್ತಾನೆ:

> 'ಯೆಹೂದ್ಯಜನರಾದ ನೀವು ನಲವತ್ತು ವರ್ಷಗಳ ಕಾಲ ಮರಳುಗಾಡಿನಲ್ಲಿದ್ದಾಗ ನನಗೆ ಯಜ್ಞ ಗಳನ್ನು ಅರ್ಪಿಸಲಿಲ್ಲ; ಕಾಣಿಕೆಗಳನ್ನು ತರಲಿಲ್ಲ.
> 43 ನೀವು ನಿಮ್ಮೊಂದಿಗೆ ಮೊಲಾಕ್‌ನ (ಸುಳ್ಳು ದೇವರ) ಗುಡಾರವನ್ನು ಮತ್ತು ನಿಮ್ಮ ದೇವ ರಾದ ರೊಂಫಾ ನಕ್ಷತ್ರರೂಪವನ್ನು ಹೊತ್ತು ಕೊಂಡು ಹೋದಿರಿ. ಆರಾಧಿಸುವುದಕ್ಕಾಗಿ ನೀವು ಮಾಡಿಕೊಂಡ ವಿಗ್ರಹಗಳೇ ಇವು. ಆದ್ದ ರಿಂದ ನಾನು ನಿಮ್ಮನ್ನು ಬಾಬಿಲೋನಿನ ಆಚೆಗೆ ಕಳುಹಿಸಿಬಿಡುವೆನು.'
>
> *ಆಮೋಸ 5:25-27*

[44]''ದೇವರು ನಮ್ಮ ಪಿತೃಗಳೊಂದಿಗೆ ಯಾವ ಗುಡಾರದಲ್ಲಿ ಮಾತಾಡಿದ್ದನೋ ಆ ಗುಡಾರವು* ಈ ಯೆಹೂದ್ಯರೊಂದಿಗೆ ಮರಳುಗಾಡಿನಲ್ಲಿತ್ತು. ಈ ಗುಡಾರವನ್ನು ನಿರ್ಮಿಸುವ ಬಗೆ ಯನ್ನು ದೇವರು ಮೋಶೆಗೆ ತಿಳಿಸಿಕೊಟ್ಟನು. ದೇವರು ತನಗೆ ತೋರಿಸಿದ ಆಕಾರದಂತೆಯೇ ಮೋಶೆಯು ಅದನ್ನು ನಿರ್ಮಿಸಿ ದನು. [45]ತರುವಾಯ ಇತರ ಜನಾಂಗಗಳ ನಾಡುಗಳನ್ನು ವಶಪಡಿಸಿಕೊಳ್ಳುವುದಕ್ಕಾಗಿ ಯೆಹೋಶುವನು ನಮ್ಮ ಪಿತೃ ಗಳನ್ನು ಮುನ್ನಡೆಸಿದನು. ನಮ್ಮ ಜನರು ಆ ದೇಶದೊಳಗೆ ಹೋದಾಗ, ದೇವರು ಇತರ ಜನರನ್ನು ಅಲ್ಲಿಂದ ಹೊರಡಿಸಿ ಬಿಟ್ಟನು. ನಮ್ಮ ಜನರು ಆ ಹೊಸ ದೇಶದೊಳಗೆ ಹೋದಾಗ ಈ ಗುಡಾರವನ್ನು ತಮ್ಮೊಂದಿಗೆ ತೆಗೆದುಕೊಂಡು ಹೋದರು. ನಮ್ಮ ಜನರು ಈ ಗುಡಾರವನ್ನು ತಮ್ಮ ಪಿತೃಗಳಿಂದ ಸ್ವೀಕರಿಸಿ ಕೊಂಡು ದಾವೀದನ ಕಾಲದವರೆಗೂ ಅದನ್ನು ಇಟ್ಟುಕೊಂಡಿ ದ್ದರು. [46]ದೇವರು ದಾವೀದನನ್ನು ಬಹಳವಾಗಿ ಮೆಚ್ಚಿ ಕೊಂಡನು. 'ಯಾಕೋಬನ ದೇವರಾದ ನಿನಗಾಗಿ ಒಂದು ಆಲಯವನ್ನು ಕಟ್ಟಲು ನನಗೆ ಅವಕಾಶ ಕೊಡು' ಎಂದು ದಾವೀದನು ದೇವರನ್ನು ಕೇಳಿಕೊಂಡನು. [47]ಆದರೆ ದೇವಾಲಯವನ್ನು ಕಟ್ಟಿದ್ದು (ದಾವೀದನ ಮಗನಾದ) ಸೊಲೊಮೋನನೇ.

[48]''ಆದರೆ ಮನುಷ್ಯರು ತಮ್ಮ ಕೈಯಾರೆ ನಿರ್ಮಿಸಿದ ಮನೆಗಳಲ್ಲಿ ಮಹೋನ್ನತನು(ದೇವರು) ವಾಸಿಸುವುದಿಲ್ಲ. ಪ್ರವಾದಿಯು ಹೀಗೆ ಬರೆದಿದ್ದಾನೆ:

> 'ಪ್ರಭುವು ಇಂತೆನ್ನುತ್ತಾನೆ, ಪರಲೋಕವು ನನ್ನ ಸಿಂಹಾಸನ.
> 49 ಭೂಮಿಯು ನನ್ನ ಪಾದಪೀಠ. ನೀವು ನನ ಗೋಸ್ಕರ ಯಾವ ಬಗೆಯ ಮನೆಯನ್ನು ಕಟ್ಟಬಲ್ಲಿರಿ? ನಾನು ವಿಶ್ರಮಿಸಿಕೊಳ್ಳತಕ್ಕ ಸ್ಥಳವೇ ಇಲ್ಲ!
> 50 ನೆನಪಿರಲಿ, ಈ ವಸ್ತುಗಳನ್ನೆಲ್ಲ ಮಾಡಿದವನು ನಾನೇ!''
>
> *ಯೆಶಾಯ 66:1-2*

[51]ಸ್ತೆಫನನು ಮಾತನ್ನು ಮುಂದುವರಿಸಿದನು: ''ಮೊಂಡ ರಾದ ಯೆಹೂದ್ಯನಾಯಕರೇ! ನೀವು ನಿಮ್ಮ ಹೃದಯಗಳನ್ನು ದೇವರಿಗೆ ಕೊಟ್ಟಿಲ್ಲ. ನೀವು ಆತನಿಗೆ ಕಿವಿಗೊಡುವುದಿಲ್ಲ. ಪವಿತ್ರಾತ್ಮನು ನಿಮಗೆ ತಿಳಿಸಲು ಪ್ರಯತ್ನಿಸುತ್ತಿರುವ ವಿಷಯಕ್ಕೆ ನೀವು ಯಾವಾಗಲೂ ವಿರೋಧಿಗಳಾಗಿದ್ದೀರಿ. ನಿಮ್ಮ ಪಿತೃಗಳು ಹೀಗೆಯೇ ಮಾಡಿದರು ಮತ್ತು ನೀವೂ ಅವರಂತೆಯೇ ಇದ್ದೀರಿ! [52]ಜೀವಿಸಿದ್ದ ಪ್ರವಾದಿಗಳಲ್ಲಿ ಪ್ರತಿಯೊಬ್ಬರನ್ನೂ ನಿಮ್ಮ ಪಿತೃಗಳು ಹಿಂಸಿಸಿದರು. ನೀತಿವಂತನೊಬ್ಬನು (ಕ್ರಿಸ್ತನು) ಬರುತ್ತಾನೆಂದು ಬಹುಕಾಲದ ಹಿಂದೆಯೇ ಆ ಪ್ರವಾದಿಗಳು ತಿಳಿಸಿದ್ದರು. ಆದರೆ ನಿಮ್ಮ ಪಿತೃಗಳು ಆ ಪ್ರವಾದಿಗಳನ್ನು ಕೊಂದುಹಾಕಿದರು. ಈಗ ನೀವು ನೀತಿವಂತನಿಗೆ ವಿರುದ್ಧವಾಗಿ ತಿರುಗಿ ಆತನನ್ನು ಕೊಂದುಹಾಕಿದಿರಿ. [53]ದೇವರು ತನ್ನ ದೂತರ ಮೂಲಕ ಕೊಟ್ಟ ಮೋಶೆಯ ಧರ್ಮಶಾಸ್ತ್ರವನ್ನು ಪಡೆದುಕೊಂಡ ನೀವೇ ಅದಕ್ಕೆ ವಿಧೇಯರಾಗುವುದಿಲ್ಲ!''

### ಸ್ತೆಫನನು ಕೊಲ್ಲಲ್ಪಟ್ಟನು

[54]ಸ್ತೆಫನನ ಈ ಮಾತುಗಳನ್ನು ಕೇಳಿದ ಆ ಯೆಹೂದ್ಯ ನಾಯಕರು ಬಹಳ ಕೋಪಗೊಂಡರು. ಅವರು ರೋಷದಿಂದ ಸ್ತೆಫನನ ಮೇಲೆ ಹಲ್ಲು ಕಡಿದರು. [55]ಆದರೆ ಸ್ತೆಫನನು ಪವಿ ತ್ರಾತ್ಮಭರಿತನಾಗಿದ್ದನು. ಅವನು ಆಕಾಶದತ್ತ ಕಣ್ಣೆತ್ತಿ ನೋಡಿ, ದೇವರ ಮಹಿಮೆಯನ್ನೂ ಯೇಸುವು ದೇವರ ಬಲಗಡೆಯಲ್ಲಿ ನಿಂತಿರುವುದನ್ನೂ ಕಂಡು, [56]''ಇಗೋ, ಪರಲೋಕವು ತೆರೆದಿರುವುದನ್ನೂ ಮನುಷ್ಯಕುಮಾರನು (ಯೇಸು) ದೇವರ ಬಲಗಡೆಯಲ್ಲಿ ನಿಂತಿರುವುದನ್ನೂ ನಾನು ನೋಡುತ್ತಿದ್ದೇನೆ!'' ಎಂದು ಹೇಳಿದನು.

[57]ಆಗ ಯೆಹೂದ್ಯನಾಯಕರೆಲ್ಲ ಗಟ್ಟಿಯಾಗಿ ಕೂಗಿ, ತಮ್ಮ ಕಿವಿಗಳನ್ನು ಕೈಗಳಿಂದ ಮುಚ್ಚಿಕೊಂಡರು. ಅವರೆಲ್ಲರು ಸ್ತೆಫನನ ಬಳಿಗೆ ಒಟ್ಟಾಗಿ ಓಡಿಬಂದು, [58]ಅವನನ್ನು ಪಟ್ಟಣದಿಂದ ಹೊರಗೆ ಎಳೆದೊಯ್ದು, ಅವನು ಸಾಯುವವರೆಗೂ ಅವನ ಮೇಲೆ ಕಲ್ಲುಗಳನ್ನು ಎಸೆದರು. ಸ್ತೆಫನನ ವಿರುದ್ಧವಾಗಿ ಸುಳ್ಳು ಹೇಳಿದ ಜನರು ತಮ್ಮ ಮೇಲಂಗಿಗಳನ್ನು ಬಿಚ್ಚಿ ಸೌಲನೆಂಬ ಯುವಕನಿಗೆ ಕೊಟ್ಟು, [59]ಸ್ತೆಫನನಿಗೆ ಕಲ್ಲುಗಳನ್ನು ಎಸೆದರು. ಆದರೆ ಸ್ತೆಫನನು ಪ್ರಾರ್ಥಿಸುತ್ತಾ, ''ಪ್ರಭುವಾದ ಯೇಸುವೇ,

---

**ಮೋಶೆಯು ... ಮಾಡು** ವಿಮೋಚನ.32:1.

**ಗುಡಾರ** ಯಜ್ಞವೇದಿಕೆಯನ್ನು ಹೊಂದಿರುವ ದೇವಾಲಯದಂತೆ ಈ ಗುಡಾರವನ್ನು ಆರಾಧನಾ ಸ್ಥಳವನ್ನಾಗಿ ಉಪಯೋಗಿಸಲಾಗುತ್ತಿತ್ತು. ಇದನ್ನು ಸ್ಥಳದಿಂದ ಸ್ಥಳಕ್ಕೆ ತೆಗೆದುಕೊಂಡು ಹೋಗಬಹುದಾಗಿತ್ತು.

ನನ್ನ ಆತ್ಮವನ್ನು ಸ್ವೀಕರಿಸಿಕೋ!'' ಎಂದನು. 60ಅವನು ಮೊಣ
ಕಾಲೂರಿ, ''ಪ್ರಭುವೇ, ಈ ಪಾಪವನ್ನು ಇವರ ಮೇಲೆ ಹೊರಿಸ
ಬೇಡ!'' ಎಂದು ಧ್ವನಿಯೆತ್ತಿ ಹೇಳುತ್ತಾ ಪ್ರಾಣಬಿಟ್ಟನು.

### ವಿಶ್ವಾಸಿಗಳಿಗೆ ಹಿಂಸೆ

8 ಸ್ತೆಫನನ ಕೊಲೆಗೆ ಸೌಲನ ಸಮ್ಮತಿಯಿತ್ತು. 2-3ಕೆಲವು
ಭಕ್ತರು ಸ್ತೆಫನನನ್ನು ಸಮಾಧಿ ಮಾಡಿದರು. ಅವರು ಅವನಿ
ಗೋಸ್ಕರ ಬಹಳವಾಗಿ ಗೋಳಾಡಿದರು. ಜೆರುಸಲೇಮಿನಲ್ಲಿದ್ದ
ವಿಶ್ವಾಸಿಗಳ ಸಮುದಾಯವನ್ನು ಹಿಂಸಿಸಲು ಯೆಹೂದ್ಯರು
ಅಂದೇ ಆರಂಭಿಸಿ ಅವರನ್ನು ಬಹಳವಾಗಿ ಸಂಕಟಪಡಿಸಿದರು.
ಆ ಸಭೆಯನ್ನು ನಾಶಮಾಡಲು ಸೌಲನು ಮನೆಗಳಿಗೆ ನುಗ್ಗಿ
ಗಂಡಸರನ್ನೂ ಹೆಂಗಸರನ್ನೂ ಎಳೆದೊಯ್ದು ಸೆರೆಮನೆಗೆ ಹಾಕಿ
ದನು. ವಿಶ್ವಾಸಿಗಳೆಲ್ಲಾ ಜೆರುಸಲೇಮನ್ನು ಬಿಟ್ಟುಹೋದರು.
ಅಪೊಸ್ತಲರು ಮಾತ್ರ ಅಲ್ಲೇ ಇದ್ದರು. ವಿಶ್ವಾಸಿಗಳು ಜುದೇಯ
ಮತ್ತು ಸಮಾರ್ಯದ ಬೇರೆಬೇರೆ ಸ್ಥಳಗಳಿಗೆ ಹೊರಟು
ಹೋದರು. 4ವಿಶ್ವಾಸಿಗಳು ಎಲ್ಲೆಲ್ಲಿಯೂ ಚದರಿಹೋದರು.
ವಿಶ್ವಾಸಿಗಳು ತಾವು ಹೋದ ಪ್ರತಿಯೊಂದು ಸ್ಥಳದಲ್ಲಿಯೂ
ಜನರಿಗೆ ಸುವಾರ್ತೆಯನ್ನು ತಿಳಿಸಿದರು.

### ಸಮಾರ್ಯದಲ್ಲಿ ಫಿಲಿಪ್ಪನ ಉಪದೇಶ

5ಫಿಲಿಪ್ಪನು ಸಮಾರ್ಯ ಪಟ್ಟಣಕ್ಕೆ ಹೋಗಿ ಕ್ರಿಸ್ತನ ಬಗ್ಗೆ
ಉಪದೇಶಿಸಿದನು. 6ಫಿಲಿಪ್ಪನು ಹೇಳುವುದನ್ನು ಅಲ್ಲಿನ ಜನರು
ಕೇಳಿದರು. ಅವನು ಮಾಡುತ್ತಿದ್ದ ಅದ್ಭುತಕಾರ್ಯಗಳನ್ನು
ನೋಡಿದರು. ಅವನು ಹೇಳಿದ ಸಂಗತಿಗಳನ್ನು ಗಮನವಿಟ್ಟು
ಕೇಳಿದರು. 7ಈ ಜನರಲ್ಲಿ ಅನೇಕರು ದೆವ್ವಗಳಿಂದ ಪೀಡಿತ
ರಾಗಿದ್ದರು. ಫಿಲಿಪ್ಪನು ಆ ದೆವ್ವಗಳನ್ನು ಅವರೊಳಗಿಂದ ಹೊರಡಿ
ಸಿದಾಗ ಅವು ಅಬ್ಬರಿಸುತ್ತಾ ಹೊರಬಂದವು. ಅಲ್ಲಿದ್ದ ಅನೇಕ
ಬಲಹೀನರನ್ನು, ಕುಂಟರನ್ನು ಸಹ ಫಿಲಿಪ್ಪನು ಗುಣಪಡಿಸಿದನು.
8ಇದರಿಂದಾಗಿ ಆ ಪಟ್ಟಣದಲ್ಲಿದ್ದ ಜನರು ಬಹು ಸಂತೋಷ
ಗೊಂಡರು.

9ಆದರೆ ಆ ಪಟ್ಟಣದಲ್ಲಿ ಸಿಮೋನ ಎಂಬ ಒಬ್ಬನಿದ್ದನು.
ಫಿಲಿಪ್ಪನು ಅಲ್ಲಿಗೆ ಬರುವುದಕ್ಕಿಂತ ಮೊದಲಿನಿಂದಲೂ
ಸಿಮೋನನು ಮಂತ್ರತಂತ್ರಗಳನ್ನು ಮಾಡುತ್ತಿದ್ದನು. ಅವನು ತನ್ನ
ತಂತ್ರಗಳಿಂದ ಸಮಾರ್ಯದ ಜನರೆಲ್ಲರನ್ನು ವಿಸ್ಮಯಗೊಳಿಸಿ
ದ್ದನು. ಸಿಮೋನನು ತನ್ನನ್ನು ಮಹಾವ್ಯಕ್ತಿಯೆಂದು ಹೇಳಿ
ಕೊಂಡು ಜಂಭಪಡುತ್ತಿದ್ದನು. 10ಎಲ್ಲಾ ಜನರು ಅಂದರೆ ಕನಿಷ್ಠ
ರಾದವರು ಮತ್ತು ಅತಿಮುಖ್ಯರಾದವರು ಸಿಮೋನನು ಹೇಳಿದ
ಸಂಗತಿಗಳನ್ನು ನಂಬಿದ್ದರು. ''ಈ ಮನುಷ್ಯನಲ್ಲಿ 'ಮಹಾಶಕ್ತಿ'
ಎಂಬ ದೇವರ ಶಕ್ತಿಯಿದೆ!'' ಎಂದು ಜನರು ಅವನ ಬಗ್ಗೆ ಹೇಳು
ತ್ತಿದ್ದರು. 11ಸಿಮೋನನು ತನ್ನ ಮಂತ್ರತಂತ್ರಗಳಿಂದ ಜನರನ್ನು
ಬಹುಕಾಲದಿಂದಲೂ ವಿಸ್ಮಯಗೊಳಿಸಿದ್ದರಿಂದ ಜನರು ಅವನ
ಹಿಂಬಾಲಕರಾಗಿದ್ದರು. 12ಆದರೆ ಫಿಲಿಪ್ಪನು ದೇವರ ರಾಜ್ಯದ
ಬಗ್ಗೆ ಮತ್ತು ಯೇಸು ಕ್ರಿಸ್ತನ ಶಕ್ತಿಯ ಬಗ್ಗೆ ಜನರಿಗೆ ಸುವಾರ್ತೆ
ಯನ್ನು ಹೇಳಿದನು. ಗಂಡಸರು ಮತ್ತು ಹೆಂಗಸರು ಫಿಲಿಪ್ಪನು
ಹೇಳಿದ್ದನ್ನು ನಂಬಿ ದೀಕ್ಷಾಸ್ನಾನ ಮಾಡಿಸಿಕೊಂಡರು.
13ಸಿಮೋನನು ಸಹ ನಂಬಿ ದೀಕ್ಷಾಸ್ನಾನ ಮಾಡಿಸಿಕೊಂಡನು.
ಸಿಮೋನನು ಫಿಲಿಪ್ಪನ ಸಮೀಪದಲ್ಲೇ ಇದ್ದನು. ಫಿಲಿಪ್ಪನು
ಮಾಡಿದ ಅದ್ಭುತಕಾರ್ಯಗಳನ್ನು ಮತ್ತು ಸೂಚಕಕಾರ್ಯ
ಗಳನ್ನು ಸಿಮೋನನು ನೋಡಿ ವಿಸ್ಮಿತನಾದನು.

14ಅಪೊಸ್ತಲರು ಇನ್ನೂ ಜೆರುಸಲೇಮಿನಲ್ಲಿದ್ದರು.
ಸಮಾರ್ಯದ ಜನರು ದೇವರ ವಾಕ್ಯವನ್ನು ಸ್ವೀಕರಿಸಿಕೊಂಡ
ರೆಂಬುದು ಅವರಿಗೆ ತಿಳಿಯಿತು. ಆದ್ದರಿಂದ ಅಪೊಸ್ತಲರು
ಪೇತ್ರ ಮತ್ತು ಯೋಹಾನರನ್ನು ಸಮಾರ್ಯದ ಜನರ ಬಳಿಗೆ
ಕಳುಹಿಸಿದರು. 15ಪೇತ್ರ ಮತ್ತು ಯೋಹಾನರು ಅಲ್ಲಿಗೆ ಬಂದು
ಸಮಾರ್ಯದ ವಿಶ್ವಾಸಿಗಳಿಗೂ ಪವಿತ್ರಾತ್ಮನು ದೊರೆಯ
ಬೇಕೆಂದು ಅವರಿಗಾಗಿ ಪ್ರಾರ್ಥಿಸಿದರು. 16ಈ ಜನರು ಪ್ರಭು
ವಾದ ಯೇಸುವಿನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಂಡಿ
ದ್ದರು. ಆದರೆ ಪವಿತ್ರಾತ್ಮನು ಅವರಲ್ಲಿ ಯಾರ ಮೇಲೆಯೂ
ಇನ್ನೂ ಇಳಿದು ಬಂದಿರಲಿಲ್ಲ. ಈ ಕಾರಣದಿಂದಲೇ ಪೇತ್ರ
ಮತ್ತು ಯೋಹಾನರು ಪ್ರಾರ್ಥಿಸಿದರು. 17ಈ ಇಬ್ಬರು ಅಪೊಸ್ತ
ಲರು ಅವರ ಮೇಲೆ ತಮ್ಮ ಕೈಗಳನ್ನಿಟ್ಟಾಗ ಅವರು ಪವಿತ್ರಾತ್ಮ
ನನ್ನು ಹೊಂದಿಕೊಂಡರು.

18ಅಪೊಸ್ತಲರು ಜನರ ಮೇಲೆ ತಮ್ಮ ಕೈಗಳನ್ನಿಟ್ಟಾಗ ಜನ
ರಿಗೆ ಪವಿತ್ರಾತ್ಮನು ದೊರೆತಿದ್ದನ್ನು ಸಿಮೋನನು ಕಂಡನು.
ಆದ್ದರಿಂದ ಸಿಮೋನನು ಅಪೊಸ್ತಲರಿಗೆ ಹಣವನ್ನು ನೀಡುತ್ತಾ,
19 ''ನಾನು ಯಾರ ಮೇಲೆ ಕೈಯಿಟ್ಟರೂ ಅವರಿಗೆ ಪವಿತ್ರಾತ್ಮನು
ದೊರೆಯುವಂಥ ಶಕ್ತಿಯನ್ನು ನನಗೆ ಕೊಡಿರಿ'' ಎಂದು
ಹೇಳಿದನು.

20ಪೇತ್ರನು ಸಿಮೋನನಿಗೆ, ''ನೀನೂ ನಾಶವಾಗು! ನಿನ್ನ
ಹಣವೂ ನಾಶವಾಗಲಿ! ದೇವರ ವರವನ್ನು ಹಣದಿಂದ ಕೊಂಡು
ಕೊಳ್ಳಬಹುದೆಂದು ನೀನು ಭಾವಿಸಿದೆ. 21ಈ ಕಾರ್ಯದಲ್ಲಿ
ನೀನು ನಮ್ಮೊಂದಿಗೆ ಭಾಗಿಯಾಗಲು ಸಾಧ್ಯವಿಲ್ಲ. ನಿನ್ನ
ಹೃದಯವು ದೇವರ ಮುಂದೆ ಸರಿಯಾಗಿಲ್ಲ. 22ನಿನ್ನ ಹೃದಯ
ವನ್ನು ಮಾರ್ಪಡಿಸಿಕೊ! ನೀನು ಮಾಡಿದ ಕೆಟ್ಟಕಾರ್ಯದಿಂದ
ತಿರುಗಿಕೊ. ಪ್ರಭುವಿನಲ್ಲಿ ಪ್ರಾರ್ಥಿಸು. ನೀನು ಹೀಗೆ ಆಲೋಚಿ
ಸಿದ್ದನ್ನು ಆತನು ಕ್ಷಮಿಸಬಹುದು. 23ನೀನು ಅತೀವ ಅಸೂಯೆ
ಯಿಂದ ತುಂಬಿದವನೂ ಪಾಪದ ಆಳ್ವಿಕೆಗೆ ಒಳಗಾದವನೂ
ಆಗಿರುವೆ'' ಎಂದು ಹೇಳಿದನು.

24 ಸಿಮೋನನು, ''ನೀವಿಬ್ಬರೂ ನನಗೋಸ್ಕರ ಪ್ರಭುವಿ
ನಲ್ಲಿ ಪ್ರಾರ್ಥಿಸಿ. ನೀವು ಹೇಳಿದ ಸಂಗತಿಗಳು ನನಗಾಗದಂತೆ
ಪ್ರಾರ್ಥಿಸಿ!'' ಎಂದು ಕೇಳಿಕೊಂಡನು.

25ಬಳಿಕ ಆ ಇಬ್ಬರು ಅಪೊಸ್ತಲರು ತಾವು ಕಂಡ
ಯೇಸುವಿನ ಕಾರ್ಯಗಳನ್ನು ಜನರಿಗೆ ತಿಳಿಸಿದರು. ಅಪೊಸ್ತ
ಲರು ಜನರಿಗೆ ಪ್ರಭುವಿನ ಸಂದೇಶವನ್ನು ತಿಳಿಸಿದರು. ಆಮೇಲೆ
ಅವರು ಜೆರುಸಲೇಮಿಗೆ ಹಿಂತಿರುಗಿದರು. ದಾರಿಯಲ್ಲಿ ಅವರು
ಸಮಾರ್ಯದ ಅನೇಕ ಊರುಗಳಿಗೆ ಹೋಗಿ ಜನರಿಗೆ ಸುವಾರ್ತೆ
ಯನ್ನು ತಿಳಿಸಿದರು.

### ಫಿಲಿಪ್ಪನು ಇಥಿಯೋಪಿಯದವನಿಗೆ ನೀಡಿದ ಉಪದೇಶ

26ಪ್ರಭುವಿನ ದೂತನೊಬ್ಬನು ಫಿಲಿಪ್ಪನಿಗೆ, ''ನೀನು ಸಿದ್ಧ
ನಾಗಿ ದಕ್ಷಿಣದ ಕಡೆಗೆ ಅಂದರೆ ಜೆರುಸಲೇಮಿನಿಂದ ಗಾಜಾಕ್ಕೆ
ಹೋಗುವ ಮರಳುಗಾಡಿನ ಮಾರ್ಗಕ್ಕೆ ಹೋಗು'' ಎಂದು
ಹೇಳಿದನು. 27ಆದ್ದರಿಂದ ಫಿಲಿಪ್ಪನು ಸಿದ್ಧನಾಗಿ ಹೊರಟನು.
ಇಥಿಯೋಪಿಯಾದ ಒಬ್ಬನನ್ನು ಅವನು ದಾರಿಯಲ್ಲಿ ಕಂಡನು.

ಈ ಮನುಷ್ಯನು ನಪುಂಸಕನಾಗಿದ್ದನು. ಇಥಿಯೋಪಿಯದವರ
ರಾಣಿಯಾದ ಕಂದಾಕೆಯ ಆಸ್ಥಾನದಲ್ಲಿ ಇವನು ಮುಖ್ಯಾಧಿ
ಕಾರಿಯಾಗಿದ್ದನು. ಹಣವನ್ನೆಲ್ಲ ನೋಡಿಕೊಳ್ಳುವ ಜವಾಬ್ದಾರಿ
ಇವನದೇ ಆಗಿತ್ತು. ಈ ಮನುಷ್ಯನು ಆರಾಧನೆಗಾಗಿ
ಜೆರುಸಲೇಮಿಗೆ ಹೋಗಿದ್ದನು. 28ಈಗ ಅವನು ತನ್ನ ಮನೆಗೆ
ಮರಳಿ ಹೋಗುತ್ತಿದ್ದನು. ಅವನು ತನ್ನ ರಥದಲ್ಲಿ ಕುಳಿತು
ಕೊಂಡು ಯೆಶಾಯನ ಗ್ರಂಥವನ್ನು ಓದುತ್ತಿದ್ದನು. 29ಪವಿತ್ರಾ
ತ್ಮನು ಫಿಲಿಪ್ಪನಿಗೆ, ‘‘ರಥದ ಬಳಿಗೆ ಹೋಗಿ ಅದರ ಸಮೀಪದಲ್ಲಿ
ನಿಂತುಕೋ’’ ಎಂದು ಹೇಳಿದನು. 30ಅಂತೆಯೇ ಫಿಲಿಪ್ಪನು
ರಥದ ಬಳಿಗೆ ಹೋದನು. ಆ ಮನುಷ್ಯನು ಓದುತ್ತಿರುವುದು
ಅವನಿಗೆ ಕೇಳಿಸಿತು. ಅವನು ಯೆಶಾಯನ ಪ್ರವಾದನಾ ಗ್ರಂಥ
ವನ್ನು ಓದುತ್ತಿದ್ದನು. ಫಿಲಿಪ್ಪನು ಅವನಿಗೆ, ‘‘ನೀನು ಓದುತ್ತಿರು
ವುದು ನಿನಗೆ ಅರ್ಥವಾಗುತ್ತಿದೆಯೋ’’ ಎಂದು ಕೇಳಿದನು.
31ಆ ಅಧಿಕಾರಿಯು ‘‘ನಾನು ಹೇಗೆ ಅರ್ಥಮಾಡಿಕೊಳ್ಳಲಿ?
ಬೇರೆ ಯಾರಾದರೂ ನನಗೆ ಅದನ್ನು ವಿವರಿಸಬೇಕು!’’ ಎಂದು
ಉತ್ತರಕೊಟ್ಟನು. ಬಳಿಕ, ರಥವನ್ನು ಹತ್ತಿ ತನ್ನೊಂದಿಗೆ ಕುಳಿತು
ಕೊಳ್ಳುವಂತೆ ಅವನು ಫಿಲಿಪ್ಪನನ್ನು ಆಹ್ವಾನಿಸಿದನು. 32ಅವನು
ಓದುತ್ತಿದ್ದ ಪವಿತ್ರ ಗ್ರಂಥದ ಭಾಗವು ಇಂತಿದೆ:

‘ವಧ್ಯಸ್ಥಾನಕ್ಕೆ ಒಯ್ದ ಕುರಿಯಂತೆ ಆತನಿದ್ದನು.
ಉಣ್ಣೆ ಕತ್ತರಿಸುವವನ ಮುಂದೆ ಮೌನವಾಗಿ
ರುವ ಕುರಿಯಂತೆ ಆತನಿದ್ದನು. ಆತನು ಬಾಯಿ
ತೆರೆಯಲಿಲ್ಲ.
33 ಆತನಿಗೆ ಅವಮಾನ ಮಾಡಿದರು. ಆತನಿಗೆ
ನ್ಯಾಯವು ದೊರೆಯಲಿಲ್ಲ. ಆತನ ಜೀವವನ್ನು
ಭೂಮಿಯ ಮೇಲಿನಿಂದ ತೆಗೆದುಬಿಟ್ಟರಲ್ಲಾ!
ಆತನ ಸಂತತಿಯವರ ಬಗ್ಗೆ ಯಾರು ಮಾತಾಡ
ಬಲ್ಲರು?’’

*ಯೆಶಾಯ 53:7-8*

34ಅವನು ಫಿಲಿಪ್ಪನಿಗೆ, ‘‘ದಯವಿಟ್ಟು ನನಗೆ ಹೇಳು, ಯಾವ
ಪ್ರವಾದಿಯ ಬಗ್ಗೆ ಇಲ್ಲಿ ಹೇಳುತ್ತಿದ್ದಾನೆ? ಅವನು ತನ್ನ ಬಗ್ಗೆ
ಹೇಳುತ್ತಿದ್ದಾನೋ ಅಥವಾ ಬೇರೊಬ್ಬನ ಬಗ್ಗೆ ಹೇಳು
ತ್ತಿದ್ದಾನೋ?’’ಎಂದು ಕೇಳಿದನು. 35ಫಿಲಿಪ್ಪನು ಪವಿತ್ರ
ಗ್ರಂಥದ ಈ ಭಾಗದಿಂದಲೇ ಆರಂಭಿಸಿ ಯೇಸುವಿನ ವಿಷಯ
ವಾದ ಸುವಾರ್ತೆಯನ್ನು ಅವನಿಗೆ ತಿಳಿಸಿದನು.
36ಅವರು ಪ್ರಯಾಣ ಮಾಡುತ್ತಾ ನೀರಿದ್ದ ಒಂದು ಸ್ಥಳಕ್ಕೆ
ಬಂದಾಗ ಅಧಿಕಾರಿಯು ‘‘ಇಗೋ! ಇಲ್ಲಿ ನೀರಿದೆ! ನಾನು
ದೀಕ್ಷಾಸ್ನಾನ ತೆಗೆದುಕೊಳ್ಳಲು ಏನಾದರೂ ಅಡ್ಡಿಯಿದೆಯೇ?’’
ಎಂದು ಫಿಲಿಪ್ಪನನ್ನು ಕೇಳಿದನು. 37* 38ಬಳಿಕ ಅವನು
ರಥವನ್ನು ನಿಲ್ಲಿಸಬೇಕೆಂದು ಆಜ್ಞಾಪಿಸಿದನು. ಅವರಿಬ್ಬರೂ
ನೀರಿನೊಳಗೆ ಇಳಿದು ಹೋದರು. ಫಿಲಿಪ್ಪನು ಅವನಿಗೆ ದೀಕ್ಷಾ
ಸ್ನಾನ ಮಾಡಿಸಿದನು. 39ಅವರು ನೀರಿನಿಂದ ಮೇಲಕ್ಕೆ ಬಂದಾಗ
ಪ್ರಭುವಿನ ಆತ್ಮನಿಂದ ಫಿಲಿಪ್ಪನು ಎತ್ತಲ್ಪಟ್ಟನು. ಅವನು ಫಿಲಿಪ್ಪ
ನನ್ನು ಮತ್ತೆಂದೂ ನೋಡಲಿಲ್ಲ. ಅವನು ಬಹಳ ಸಂತೋಷ
ದಿಂದ ತನ್ನ ಪ್ರಯಾಣವನ್ನು ಮುಂದುವರಿಸಿದನು. 40ಆದರೆ
ಫಿಲಿಪ್ಪನು ಆಜೋತ್ ಎಂಬ ಪಟ್ಟಣದಲ್ಲಿ ಕಾಣಿಸಿಕೊಂಡು
ಸೆಜರೇಯ ಎಂಬ ಪಟ್ಟಣಕ್ಕೆ ಹೋದನು. ಅಲ್ಲಿಗೆ ಹೋಗುವಾಗ
ದಾರಿಯಲ್ಲಿ ಸಿಕ್ಕಿದ ಎಲ್ಲಾ ಊರುಗಳಲ್ಲಿಯೂ ಸುವಾರ್ತೆ
ಯನ್ನು ಸಾರಿದನು.

### ಸೌಲನು ಮಾರ್ಪಾಟಾದನು

9 ಪ್ರಭುವಿನ ಶಿಷ್ಯರನ್ನು ಹೆದರಿಸಲು ಮತ್ತು ಕೊಲ್ಲಲು
ಸೌಲನು ಜೆರುಸಲೇಮಿನಲ್ಲಿ ಇನ್ನೂ ಪ್ರಯತ್ನಿಸುತ್ತಿದ್ದನು.
ಆದ್ದರಿಂದ ಅವನು ಪ್ರಧಾನಯಾಜಕನ ಬಳಿಗೆ ಹೋಗಿ,
2ದಮಸ್ಕದಲ್ಲಿ ಕ್ರಿಸ್ತನ ಮಾರ್ಗವನ್ನು ಅನುಸರಿಸುವವರನ್ನು
ಕಂಡುಹಿಡಿದು, ಸ್ತ್ರೀಯರು ಪುರುಷರು ಎನ್ನದೆ ಅವರನ್ನು
ಬಂಧಿಸಿ ಜೆರುಸಲೇಮಿಗೆ ಎಳೆದುಕೊಂಡು ಬರಲು ತನಗೆ
ಅಧಿಕಾರ ಕೊಟ್ಟಿರುವುದಾಗಿ ದಮಸ್ಕ ಪಟ್ಟಣದ ಸಭಾಮಂದಿರ
ಗಳಿಗೆ ಪತ್ರ ಬರೆಯಬೇಕೆಂದು ಕೇಳಿಕೊಂಡನು.
3ಅಂತೆಯೇ ಸೌಲನು ದಮಸ್ಕಕ್ಕೆ ಹೊರಟನು. ಅವನು
ಪಟ್ಟಣದ ಸಮೀಪಕ್ಕೆ ಬಂದಾಗ, ಬಹು ಪ್ರಕಾಶಮಾನವಾದ
ಬೆಳಕೊಂದು ಆಕಾಶದಿಂದ ಇದ್ದಕ್ಕಿದ್ದಂತೆ ಅವನ ಸುತ್ತಲೂ
ಹೊಳೆಯಿತು. 4ಸೌಲನು ನೆಲಕ್ಕೆ ಬಿದ್ದನು. ‘‘ಸೌಲನೇ,
ಸೌಲನೇ,ನೀನು ನನ್ನನ್ನೇಕೆ ಹಿಂಸಿಸುತ್ತಿರುವೆ?’’ಎಂಬ ವಾಣಿ
ಯೊಂದು ಅವನಿಗೆ ಕೇಳಿಸಿತು.
5ಸೌಲನು, ‘‘ಪ್ರಭುವೇ, ನೀನು ಯಾರು?’’ ಎಂದನು.
ಆ ವಾಣಿಯು, ‘‘ನೀನು ಹಿಂಸಿಸುತ್ತಿರುವ ಯೇಸುವೇ
ನಾನು! 6ಈಗ ಎದ್ದು ಪಟ್ಟಣದೊಳಗೆ ಹೋಗು. ನೀನು ಏನು
ಮಾಡಬೇಕೆಂಬುದನ್ನು ಅಲ್ಲಿಯ ಒಬ್ಬನು ನಿನಗೆ ತಿಳಿಸುವನು’’
ಎಂದಿತು.
7ಸೌಲನೊಂದಿಗೆ ಪ್ರಯಾಣ ಮಾಡುತ್ತಿದ್ದವರು ಅಲ್ಲೇ
ನಿಂತಿದ್ದರು. ಅವರು ಏನೂ ಮಾತಾಡಲಿಲ್ಲ. ಆ ಜನರು
ವಾಣಿಯನ್ನು ಕೇಳಿದರು, ಆದರೆ ಅವರು ಯಾರನ್ನೂ ನೋಡ
ಲಿಲ್ಲ.
8ಸೌಲನು ನೆಲದ ಮೇಲಿಂದ ಎದ್ದು ಕಣ್ಣುಗಳನ್ನು ತೆರೆದನು.
ಆದರೆ ಅವನಿಗೆ ಏನೂ ಕಾಣಲಿಲ್ಲ. ಆದ್ದರಿಂದ
ಸೌಲನೊಂದಿಗಿದ್ದ ಜನರು ಅವನನ್ನು ಕೈಹಿಡಿದು ದಮಸ್ಕಕ್ಕೆ
ಕರೆದೊಯ್ದರು. 9ಮೂರು ದಿನಗಳವರೆಗೆ ಸೌಲನಿಗೆ ಏನೂ
ಕಾಣಲಿಲ್ಲ. ಅವನು ಊಟವನ್ನೂ ಮಾಡಲಿಲ್ಲ, ನೀರನ್ನೂ
ಕುಡಿಯಲಿಲ್ಲ.
10ದಮಸ್ಕದಲ್ಲಿ ಯೇಸುವಿನ ಶಿಷ್ಯನೊಬ್ಬನಿದ್ದನು. ಅವನ
ಹೆಸರು ಅನನೀಯ. ಪ್ರಭುವು ಅನನೀಯನನ್ನು ದರ್ಶನದಲ್ಲಿ
‘‘ಅನನೀಯನೇ’’ ಎಂದು ಕರೆದನು.
ಅನನೀಯನು, ‘‘ಪ್ರಭುವೇ, ಇಗೋ ಇದ್ದೇನೆ’’ ಎಂದು
ಉತ್ತರಕೊಟ್ಟನು.
11ಪ್ರಭುವು ಅನನೀಯನಿಗೆ, ‘‘ಎದ್ದು ‘ನೇರಬೀದಿ’ ಎಂಬ
ಬೀದಿಗೆ ಹೋಗು. ಅಲ್ಲಿರುವ ಯೂದನ* ಮನೆಯನ್ನು ಕಂಡು

---

**ವಚನ 37** ಅಪೊಸ್ತಲರ ಕಾರ್ಯಗಳ ಕೆಲವು ಪ್ರತಿಗಳಲ್ಲಿ 37ನೇ ವಚನವನ್ನು ಸೇರಿಸಲಾಗಿದೆ. ‘‘ಫಿಲಿಪ್ಪನು, ‘ನೀನು ಪೂರ್ಣಹೃದಯದಿಂದ ನಂಬುವುದಾದರೆ ಅಡ್ಡಿಯಿಲ್ಲ’ ಎಂದು ಉತ್ತರಿಸಿದನು. ಅದಕ್ಕೆ ಅಧಿಕಾರಿಯು, ‘ಯೇಸು ಕ್ರಿಸ್ತನೇ ದೇವರ ಮಗನೆಂದು ನಾನು ನಂಬುತ್ತೇನೆ’’’ ಎಂದನು.

**ಯೂದ** ಇವನು ಅಪೊಸ್ತಲ ಯೂದನಲ್ಲ.

ಕೊಂಡು ತಾರ್ಸಸ್ ಪಟ್ಟಣದ ಸೌಲನ ಬಗ್ಗೆ ವಿಚಾರಿಸು. ಈಗ
ಅವನು ಅಲ್ಲಿ ಪ್ರಾರ್ಥಿಸುತ್ತಿದ್ದಾನೆ. 12ಸೌಲನು ಒಂದು ದರ್ಶನ
ವನ್ನು ಕಂಡಿದ್ದಾನೆ. ಅನನೀಯನೆಂಬ ಒಬ್ಬನು ಅವನ ಬಳಿಗೆ
ಬಂದು ತನ್ನ ಕೈಗಳನ್ನು ಅವನ ಮೇಲಿಡುವನು. ಆಗ ಅವನಿಗೆ
ಮತ್ತೆ ದೃಷ್ಟಿ ಬರುವುದು. ಇದೇ ಆ ದರ್ಶನ’’ ಎಂದು
ಹೇಳಿದನು.
13ಆದರೆ ಅನನೀಯನು, ‘‘ಪ್ರಭುವೇ, ಜೆರುಸಲೇಮಿ
ನಲ್ಲಿರುವ ನಿನ್ನ ಪವಿತ್ರ ಜನರಿಗೆ ಈ ಮನುಷ್ಯನು ಮಾಡಿದ ಅನೇಕ
ಕೆಟ್ಟ ಕೃತ್ಯಗಳ ಬಗ್ಗೆ ಜನರು ನನಗೆ ಹೇಳಿದ್ದಾರೆ. 14ಈಗ ಅವನು
ದಮಸ್ಕಕ್ಕೂ ಬಂದಿದ್ದಾನೆ. ನಿನ್ನಲ್ಲಿ ನಂಬಿಕೆ ಇಡುವ*
ಜನರೆಲ್ಲರನ್ನು ಬಂಧಿಸುವ ಅಧಿಕಾರವನ್ನು ಮಹಾಯಾಜಕರು
ಅವನಿಗೆ ಕೊಟ್ಟಿದ್ದಾರೆ’’ ಎಂದು ಹೇಳಿದನು.
15ಆದರೆ ಪ್ರಭುವು ಅನನೀಯನಿಗೆ, ‘‘ಹೋಗು! ಮುಖ್ಯ
ವಾದ ಕೆಲಸಕ್ಕಾಗಿ ನಾನು ಸೌಲನನ್ನು ಆರಿಸಿಕೊಂಡಿದ್ದೇನೆ.
ಅವನು ನನ್ನ ಬಗ್ಗೆ ರಾಜರುಗಳಿಗೂ ಯೆಹೂದ್ಯರಿಗೂ ಮತ್ತು
ಇತರ ಜನಾಂಗಗಳಿಗೂ ತಿಳಿಸಬೇಕಾಗಿದೆ. 16ಅವನು ನನ್ನ
ಹೆಸರಿನ ನಿಮಿತ್ತ ಅನುಭವಿಸಬೇಕಾಗಿರುವ ಹಿಂಸೆಯನ್ನು ನಾನೇ
ಅವನಿಗೆ ತೋರಿಸಿಕೊಡುವೆನು’’ ಎಂದು ಹೇಳಿದನು.
17ಆದ್ದರಿಂದ ಅನನೀಯನು ಅಲ್ಲಿಂದ ಹೊರಟು ಯೂದನ
ಮನೆಗೆ ಹೋದನು. ಅವನು ಸೌಲನ ಮೇಲೆ ತನ್ನ ಕೈಗಳನ್ನಿಟ್ಟು,
‘‘ಸೌಲನೇ, ನನ್ನ ಸಹೋದರನೇ, ಪ್ರಭುವಾದ ಯೇಸು ನನ್ನನ್ನು
ಕಳುಹಿಸಿದ್ದಾನೆ. ನೀನು ಇಲ್ಲಿಗೆ ಬರುವಾಗ ದಾರಿಯಲ್ಲಿ ಕಂಡದ್ದು
ಆತನನ್ನೇ. ನೀನು ಮತ್ತೆ ದೃಷ್ಟಿಪಡೆಯಬೇಕೆಂತಲೂ ಪವಿತ್ರಾತ್ಮ
ಭರಿತನಾಗಬೇಕೆಂತಲೂ ಯೇಸು ನನ್ನನ್ನು ಕಳುಹಿಸಿದನು’’
ಎಂದು ಹೇಳಿದನು. 18ಇದ್ದಕ್ಕಿದ್ದಂತೆ, ಮೀನಿನ ಪರೆಯಂತಿದ್ದ
ಏನೋ ಒಂದು ಸೌಲನ ಕಣ್ಣುಗಳಿಂದ ಕಳಚಿಬಿದ್ದಿತು. ಸೌಲನಿಗೆ
ಮತ್ತೆ ಕಣ್ಣು ಕಾಣತೊಡಗಿತು! ಸೌಲನು ಮೇಲೆದ್ದು, ದೀಕ್ಷಾ
ಸ್ನಾನ ಮಾಡಿಸಿಕೊಂಡನು. 19ಬಳಿಕ ಅವನು ಊಟಮಾಡಿ
ಚೇತರಿಸಿಕೊಂಡನು.

### ಸೌಲನು ದಮಸ್ಕದಲ್ಲಿ ಬೋಧಿಸುವನು

ಸೌಲನು ದಮಸ್ಕದಲ್ಲಿ ಯೇಸುವಿನ ಶಿಷ್ಯರೊಂದಿಗೆ ಕೆಲವು
ದಿನಗಳವರೆಗೆ ಇದ್ದನು. 20ಅವನು ತಡಮಾಡದೆ ಸಭಾಮಂದಿರ
ಗಳಿಗೆ ಹೋಗಿ ‘ಯೇಸುವೇ ದೇವಕುಮಾರನೆಂದು ಬೋಧಿಸ
ತೊಡಗಿದನು.
21ಸೌಲನ ಮಾತನ್ನು ಕೇಳಿದ ಜನರೆಲ್ಲರೂ ವಿಸ್ಮಯ
ಗೊಂಡು, ‘‘ಜೆರುಸಲೇಮಿನಲ್ಲಿದ್ದವನು ಈ ಮನುಷ್ಯನೇ. ಈ
ಹೆಸರಿನಲ್ಲಿ (ಯೇಸುವಿನ) ನಂಬಿಕೆ ಇಡುವ ಜನರನ್ನು ನಾಶ
ಮಾಡಲು ಇವನು ಪ್ರಯತ್ನಿಸುತ್ತಿದ್ದನು! ಯೇಸುವಿನ ಶಿಷ್ಯರನ್ನು
ಬಂಧಿಸಿ ಜೆರುಸಲೇಮಿನಲ್ಲಿರುವ ಮಹಾಯಾಜಕರ ಬಳಿಗೆ
ಕೊಂಡೊಯ್ಯಲು ಇವನು ಇಲ್ಲಿಗೂ ಬಂದಿದ್ದಾನೆ’’ ಎಂದು
ಹೇಳಿದರು.
22ಆದರೆ ಸೌಲನು ಹೆಚ್ಚುಹೆಚ್ಚು ಪ್ರಬಲವಾಗಿ ಯೇಸುವೇ
ಕ್ರಿಸ್ತನೆಂದು ನಿರೂಪಿಸಿದನು. ಅವನ ಆಧಾರಗಳು ಬಹು
ಬಲವಾಗಿದ್ದ ಕಾರಣ ದಮಸ್ಕದ ಯೆಹೂದ್ಯರು ಅವನೊಂದಿಗೆ
ವಾದಮಾಡಲಿಲ್ಲ.

### ಸೌಲನು ಯೆಹೂದ್ಯರಿಂದ ತಪ್ಪಿಸಿಕೊಳ್ಳುವನು

23ಅನೇಕ ದಿನಗಳಾದ ಮೇಲೆ, ಯೆಹೂದ್ಯರು ಸೌಲನನ್ನು
ಕೊಲ್ಲಲು ಸಂಚುಮಾಡಿದರು. 24ಯೆಹೂದ್ಯರು ಸೌಲನಿಗಾಗಿ
ಎದುರುನೋಡುತ್ತಾ ನಗರದ ದ್ವಾರಗಳನ್ನು ಹಗಲು ರಾತ್ರಿ
ಕಾಯುತ್ತಿದ್ದರು. ಆದರೆ ಅವರ ಯೋಜನೆ ಸೌಲನಿಗೆ ತಿಳಿ
ಯಿತು.
25ಒಂದು ರಾತ್ರಿ, ಸೌಲನ ಕೆಲವು ಶಿಷ್ಯರು ಅವನನ್ನು
ಪಟ್ಟಣದಿಂದ ಹೊರಗೆ ಕಳುಹಿಸುವುದಕ್ಕಾಗಿ ಅವನನ್ನು ಒಂದು
ಬುಟ್ಟಿಯಲ್ಲಿ ಕುಳ್ಳಿರಿಸಿ, ನಗರದ ಕೋಟೆಯ ಸುದಿನ ಮೂಲಕ
ಅವನನ್ನು ಕೆಳಗಿಳಿಸಿದರು.

### ಜೆರುಸಲೇಮಿನಲ್ಲಿ ಸೌಲನು

26ಬಳಿಕ ಸೌಲನು ಜೆರುಸಲೇಮಿಗೆ ಹೋದನು. ಅವನು
ವಿಶ್ವಾಸಿಗಳ ಸಮುದಾಯವನ್ನು ಸೇರಿಕೊಳ್ಳಲು ಪ್ರಯತ್ನಿಸಿದನು.
ಆದರೆ ಅವರೆಲ್ಲರೂ ಅವನಿಗೆ ಭಯಪಟ್ಟರು. ಸೌಲನು ನಿಜ
ವಾಗಿ ಯೇಸುವಿನ ಶಿಷ್ಯನೆಂದು ಅವರು ನಂಬಲಿಲ್ಲ. 27ಆದರೆ
ಬಾರ್ನಬನು ಸೌಲನನ್ನು ಸ್ವೀಕರಿಸಿಕೊಂಡು ಅಪೊಸ್ತಲರ ಬಳಿಗೆ
ಕರೆದುಕೊಂಡು ಬಂದನು. ಸೌಲನು ದಮಸ್ಕದ ದಾರಿಯಲ್ಲಿ
ಪ್ರಭುವನ್ನು ನೋಡಿರುವುದನ್ನೂ ಪ್ರಭುವು ಸೌಲನೊಂದಿಗೆ
ಮಾತಾಡಿದ್ದನ್ನೂ ಬಾರ್ನಬನು ಅವರಿಗೆ ವಿವರಿಸಿದನು. ಅಲ್ಲದೆ
ಸೌಲನು ದಮಸ್ಕದಲ್ಲಿ ಜನರಿಗೆ ಪ್ರಭುವಿನ ವಿಷಯದಲ್ಲಿ
ನಿರ್ಭಯವಾಗಿ ಬೋಧಿಸಿದ್ದನ್ನೂ ಅವರಿಗೆ ತಿಳಿಸಿದನು.
28ಅಂದಿನಿಂದ ಸೌಲನು ವಿಶ್ವಾಸಿಗಳೊಂದಿಗೆ ಇದ್ದನು.
ಅವನು ಪ್ರಭುವಿನ ವಿಷಯವನ್ನು ಜೆರುಸಲೇಮಿನಲ್ಲಿ ನಿರ್ಭಯ
ವಾಗಿ ಬೋಧಿಸಿದನು. 29ಗ್ರೀಕ್ ಮಾತಾಡುತ್ತಿದ್ದ ಯೆಹೂದ್ಯ
ರೊಂದಿಗೆ ಸೌಲನು ಪದೇಪದೇ ವಾದಮಾಡಿದನು. ಆದರೆ
ಅವರು ಅವನನ್ನು ಕೊಲ್ಲಲು ಪ್ರಯತ್ನಿಸಿದರು. 30ಇದರ ಬಗ್ಗೆ
ಸಹೋದರರಿಗೆ ತಿಳಿದಾಗ ಅವರು ಸೌಲನನ್ನು ಸೆಜರೇಯ
ಪಟ್ಟಣಕ್ಕೆ ಕೊಂಡೊಯ್ದು ಅಲ್ಲಿಂದ ತಾರ್ಸಸ್ ಪಟ್ಟಣಕ್ಕೆ
ಕಳುಹಿಸಿದರು.
31ಇಂತಿರಲು, ಜುದೇಯ, ಗಲಿಲಾಯ ಮತ್ತು ಸಮಾರ್ಯ
ಪ್ರದೇಶಗಳಲ್ಲಿ ಇದ್ದ ಸಭೆಗಳಲ್ಲಿ ಶಾಂತಿ ನೆಲೆಸಿತು. ಪವಿತ್ರಾತ್ಮನ
ಸಹಾಯದಿಂದ ಸಭೆಗಳು ಬಲವಾಗತೊಡಗಿದವು. ವಿಶ್ವಾಸಿಗಳು
ತಾವು ಪ್ರಭುವನ್ನು ಗೌರವಿಸುವುದಾಗಿ ತಮ್ಮ ಜೀವಿತಗಳ
ಮೂಲಕ ತೋರಿಸಿಕೊಟ್ಟರು. ಇದರಿಂದ ವಿಶ್ವಾಸಿಗಳ ಸಭೆಯು
ಹೆಚ್ಚುಹೆಚ್ಚು ಬೆಳೆಯತೊಡಗಿತು. 32ಜೆರುಸಲೇಮಿನ ಸುತ್ತ
ಮುತ್ತಲ್ಲಿದ್ದ ಊರುಗಳಲ್ಲೆಲ್ಲಾ ಪೇತ್ರನು ಪ್ರಯಾಣ ಮಾಡು
ತ್ತಿರುವಾಗ ಲುದ್ದ ಎಂಬ ಊರಲ್ಲಿ ವಾಸವಾಗಿರುವ ವಿಶ್ವಾಸಿ
ಗಳನ್ನು ಭೇಟಿಯಾಗಲು ಅಲ್ಲಿಗೆ ಹೋದನು. 33ಅವನು ಲುದ್ದ
ದಲ್ಲಿ ಐನೇಯಾ ಎಂಬವನನ್ನು ಕಂಡನು. ಪಾರ್ಶ್ವವಾಯು
ರೋಗಿಯಾಗಿದ್ದ ಅವನು ಎಂಟು ವರ್ಷಗಳಿಂದ ಹಾಸಿಗೆ
ಮೇಲಿದ್ದನು. 34ಪೇತ್ರನು ಅವನಿಗೆ ‘‘ಐನೇಯಾ, ಯೇಸು
ಕ್ರಿಸ್ತನು ನಿನ್ನನ್ನು ಗುಣಪಡಿಸುತ್ತಾನೆ. ಎದ್ದು ನಿನ್ನ ಹಾಸಿಗೆಯನ್ನು
ಎತ್ತಿಡು!’’ ಎಂದು ಹೇಳಿದನು. ಆ ಕೂಡಲೇ ಐನೇಯನು
ಎದ್ದುನಿಂತನು. 35ಲುದ್ದದಲ್ಲಿ ಮತ್ತು ಸಾರೋನಿನ ಬಯಲಿನಲ್ಲಿ
ವಾಸವಾಗಿದ್ದ ಜನರೆಲ್ಲರು ಅವನನ್ನು ಕಂಡು ಪ್ರಭು
ಯೇಸುವಿನಲ್ಲಿ ನಂಬಿಕೆ ಇಟ್ಟರು.

---

**ನಿನ್ನಲ್ಲಿ ನಂಬಿಕೆ ಇಡುವ** ಅಕ್ಷರಶಃ ‘‘ನಿನ್ನ ಹೆಸರನ್ನು ಹೇಳುವವರು.’’

### ಜೊಪ್ಪದಲ್ಲಿ ಪೇತ್ರನು

36ಜೊಪ್ಪ ಪಟ್ಟಣದಲ್ಲಿ ತಬಿಥಾ ಎಂಬ ಯೇಸುವಿನ
ಶಿಷ್ಯಳಿದ್ದಳು. (ಗ್ರೀಕ್ ಭಾಷೆಯಲ್ಲಿ ಆಕೆಯ ಹೆಸರು 'ದೊರ್ಕ'
ಅಂದರೆ ಜಿಂಕೆ.) ಆಕೆಯು ಜನರಿಗೆ ಯಾವಾಗಲೂ ಒಳ್ಳೆಯ
ಕಾರ್ಯಗಳನ್ನು ಮಾಡುತ್ತಿದ್ದಳು. ಆಕೆಯು ಕೊರತೆಯಲ್ಲಿದ್ದ
ಜನರಿಗೆ ಯಾವಾಗಲೂ ಹಣಕೊಡುತ್ತಿದ್ದಳು. 37ಪೇತ್ರನು ಲುದ್ದ
ದಲ್ಲಿದ್ದಾಗ ಆಕೆಯು ಕಾಯಿಲೆಯಿಂದ ಸತ್ತುಹೋದಳು. ಜನರು
ಆಕೆಯ ದೇಹವನ್ನು ತೊಳೆದು ಮೇಲ್ಮಾಳಿಗೆಯ ಒಂದು ಕೋಣೆ
ಯಲ್ಲಿಟ್ಟರು. 38ಪೇತ್ರನು ಲುದ್ದದಲ್ಲಿದ್ದಾನೆಂಬ ಸುದ್ದಿಯು
ಜೊಪ್ಪದಲ್ಲಿದ್ದ ವಿಶ್ವಾಸಿಗಳಿಗೆ ತಿಳಿಯಿತು. (ಲುದ್ದವು ಜೊಪ್ಪದ
ಸಮೀಪದಲ್ಲಿದೆ.) ಆದ್ದರಿಂದ ಅವರು ಇಬ್ಬರನ್ನು ಪೇತ್ರನ ಬಳಿಗೆ
ಕಳುಹಿಸಿದರು. ಅವರು, "ತ್ವರೆ ಮಾಡು, ದಯವಿಟ್ಟು ಬೇಗನೆ
ಬಾ!" ಎಂದು ಅವನನ್ನು ಬೇಡಿಕೊಂಡರು. 39ಪೇತ್ರನು ಸಿದ್ಧ
ನಾಗಿ ಅವರೊಂದಿಗೆ ಹೋದನು. ಅವನು ಅಲ್ಲಿಗೆ ತಲುಪಿದಾಗ,
ಅವರು ಅವನನ್ನು ಮೇಲ್ಮಾಳಿಗೆಯ ಕೋಣೆಗೆ ಕರೆದುಕೊಂಡು
ಹೋದರು. ವಿಧವೆಯರೆಲ್ಲ ಅಳುತ್ತಾ ಪೇತ್ರನನ್ನು ಸುತ್ತು
ವರಿದರು. ದೊರ್ಕಳು ಇನ್ನೂ ಜೀವಂತವಾಗಿದ್ದಾಗ ತಮಗಾಗಿ
ತಯಾರಿಸಿ ಕೊಟ್ಟ ಮೇಲಂಗಿಗಳನ್ನು ಮತ್ತು ಬಟ್ಟೆಗಳನ್ನು ಅವರು
ಪೇತ್ರನಿಗೆ ತೋರಿಸಿದರು. 40ಪೇತ್ರನು ಜನರೆಲ್ಲರನ್ನು ಕೋಣೆ
ಯಿಂದ ಹೊರಗೆ ಕಳುಹಿಸಿ ಮೊಣಕಾಲೂರಿ ಪ್ರಾರ್ಥಿಸಿದನು.
ಬಳಿಕ ಅವನು ತಬಿಥಳ ದೇಹದ ಕಡೆಗೆ ತಿರುಗಿ, "ತಬಿಥಾ,
ಎದ್ದುನಿಲ್ಲು!" ಎಂದನು. ಆಕೆ ತನ್ನ ಕಣ್ಣುಗಳನ್ನು ತೆರೆದಳು.
ಆಕೆಯು ಪೇತ್ರನನ್ನು ಕಂಡು ಎದ್ದು ಕುಳಿತುಕೊಂಡಳು.
41ಅವನು ಕೈನೀಡಿ ಎದ್ದುನಿಲ್ಲಲು ಆಕೆಗೆ ಸಹಾಯ ಮಾಡಿದನು.
ಬಳಿಕ ಅವನು ವಿಶ್ವಾಸಿಗಳನ್ನು ಮತ್ತು ವಿಧವೆಯರನ್ನು ಕೋಣೆ
ಯೊಳಗೆ ಕರೆದು ಅವರಿಗೆ ತಬಿಥಳನ್ನು ತೋರಿಸಿದನು. ಆಕೆ
ಜೀವಂತವಾಗಿದ್ದಳು. 42ಜೊಪ್ಪದ ಎಲ್ಲಾ ಕಡೆಗಳಲ್ಲಿಯೂ ಇದ್ದ
ಜನರಿಗೆ ಈ ವಿಷಯ ತಿಳಿಯಿತು. ಈ ಜನರಲ್ಲಿ ಅನೇಕರು
ಪ್ರಭುವನ್ನು ನಂಬಿದರು. 43ಪೇತ್ರನು ಅನೇಕ ದಿನಗಳವರೆಗೆ
ಜೊಪ್ಪದಲ್ಲಿದ್ದನು. ಚರ್ಮಕಾರನಾದ ಸಿಮೋನನ ಮನೆಯಲ್ಲಿ
ಅವನು ಇಳಿದುಕೊಂಡಿದ್ದನು.

### ಪೇತ್ರ ಮತ್ತು ಕೊರ್ನೇಲಿಯ

10 ಸೆಜರೇಯ ಪಟ್ಟಣದಲ್ಲಿ ಕೊರ್ನೇಲಿಯ ಎಂಬವ
ನಿದ್ದನು. ರೋಮಿನ ಸೈನ್ಯಕ್ಕೆ ಸೇರಿದ 'ಇಟಲಿಯ
ದಳ'ದಲ್ಲಿ ಅವನು ಅಧಿಕಾರಿಯಾಗಿದ್ದನು. 2ಕೊರ್ನೇಲಿಯನು
ದೈವಭಕ್ತನಾಗಿದ್ದನು. ಅವನು ಮತ್ತು ಅವನ ಕುಟುಂಬದಲ್ಲಿ
ವಾಸವಾಗಿದ್ದ ಇತರ ಎಲ್ಲಾ ಜನರು ನಿಜದೇವರನ್ನು ಆರಾಧಿಸು
ತ್ತಿದ್ದರು. ಅವನು ಬಡವರಿಗೆ ಧಾರಾಳವಾಗಿ ಹಣವನ್ನು ಕೊಡುತ್ತಿ
ದ್ದನು. ಯಾವಾಗಲೂ ದೇವರಲ್ಲಿ ಪ್ರಾರ್ಥಿಸುತ್ತಿದ್ದನು. 3ಒಂದು
ಮಧ್ಯಾಹ್ನ ಸುಮಾರು ಮೂರು ಗಂಟೆಯಲ್ಲಿ ಕೊರ್ನೇಲಿಯನಿಗೆ
ಒಂದು ದರ್ಶನವಾಯಿತು. ಅವನು ಅದನ್ನು ಸ್ಪಷ್ಟವಾಗಿ
ಕಂಡನು. ಆ ದರ್ಶನದಲ್ಲಿ ದೇವದೂತನೊಬ್ಬನು ಅವನ ಬಳಿಗೆ
ಬಂದು, "ಕೊರ್ನೇಲಿಯನೇ" ಎಂದು ಕರೆದನು.
4ಕೊರ್ನೇಲಿಯನು ದೇವದೂತನನ್ನು ಕಂಡು ಭಯದಿಂದ,
"ಸ್ವಾಮಿ, ನಿಮಗೇನು ಬೇಕು?" ಎಂದು ಕೇಳಿದನು.
ಆ ದೇವದೂತನು ಅವನಿಗೆ "ದೇವರು ನಿನ್ನ ಪ್ರಾರ್ಥನೆ
ಗಳನ್ನು ಕೇಳಿದ್ದಾನೆ. ನೀನು ಬಡವರಿಗೆ ಕೊಟ್ಟವುಗಳನ್ನು ಆತನು
ನೋಡಿದ್ದಾನೆ. ದೇವರು ನಿನ್ನನ್ನು ಮೆಚ್ಚಿಕೊಂಡಿದ್ದಾನೆ. 5ಈಗ,
ಸೀಮೋನ ಎಂಬ ವ್ಯಕ್ತಿಯನ್ನು ಕರೆದುಕೊಂಡು ಬರುವುದಕ್ಕಾಗಿ
ನೀನು ಜನರನ್ನು ಜೊಪ್ಪ ಪಟ್ಟಣಕ್ಕೆ ಕಳುಹಿಸು. ಸೀಮೋನನನ್ನು
'ಪೇತ್ರ' ಎಂತಲೂ ಕರೆಯುತ್ತಾರೆ. 6ಸೀಮೋನನು ಚರ್ಮ
ಕಾರನ ಮನೆಯಲ್ಲಿ ಇಳಿದುಕೊಂಡಿದ್ದಾನೆ. ಅವನ ಮನೆಯು
ಸಮುದ್ರ ತೀರದಲ್ಲಿದೆ" ಎಂದು ಹೇಳಿದನು. 7ಕೊರ್ನೇಲಿಯ
ನೊಂದಿಗೆ ಮಾತಾಡಿದ ದೇವದೂತನು ಹೊರಟು ಹೋದನು.
ಬಳಿಕ ಕೊರ್ನೇಲಿಯನು ತನ್ನ ಸೇವಕರಲ್ಲಿ ಇಬ್ಬರನ್ನೂ ಒಬ್ಬ
ಸೈನಿಕನನ್ನೂ ಕರೆದನು. ಈ ಸೈನಿಕನು ದೈವಭಕ್ತನಾಗಿದ್ದನು.
ಕೊರ್ನೇಲಿಯನ ಆಪ್ತಸಹಾಯಕರಲ್ಲಿ ಇವನೂ ಒಬ್ಬ
ನಾಗಿದ್ದನು. 8ಕೊರ್ನೇಲಿಯನು ಈ ಮೂವರಿಗೆ ಪ್ರತಿ
ಯೊಂದನ್ನೂ ವಿವರಿಸಿದನು. ಬಳಿಕ ಅವರನ್ನು ಜೊಪ್ಪಕ್ಕೆ
ಕಳುಹಿಸಿದನು.
9ಮರುದಿನ ಈ ಜನರು ಜೊಪ್ಪಕ್ಕೆ ಸಮೀಪಿಸಿದಾಗ
ಮಧ್ಯಾಹ್ನದ ಸಮಯವಾಗಿತ್ತು. ಆ ಸಮಯದಲ್ಲಿ ಪೇತ್ರನು
ಪ್ರಾರ್ಥಿಸುವುದಕ್ಕಾಗಿ ಮಾಳಿಗೆಯ ಮೇಲೆ ಹೋದನು. 10ಪೇತ್ರ
ನಿಗೆ ಹಸಿವೆಯಾಗಿ ಊಟಮಾಡಬೇಕೆನಿಸಿತು. ಅಲ್ಲಿ ಅವನಿಗಾಗಿ
ಅಡಿಗೆ ಮಾಡುತ್ತಿದ್ದರು. ಇತ್ತ, ಪೇತ್ರನಿಗೊಂದು ದರ್ಶನ
ವಾಯಿತು. 11ತೆರೆದ ಆಕಾಶದಿಂದ ಯಾವುದೋ ಒಂದು ವಸ್ತು
ಇಳಿದು ಬರುತ್ತಿರುವುದನ್ನು ಅವನು ಕಂಡನು. ಅದು ದೊಡ್ಡ
ತಟ್ಟೆಯಂತಿತ್ತು. ಅದರ ನಾಲ್ಕು ಮೂಲೆಗಳಲ್ಲಿ ಹಗ್ಗಗಳನ್ನು ಕಟ್ಟಿ
ಭೂಮಿಯ ಮೇಲೆ ಇಳಿಯ ಬಿಡಲಾಗಿತ್ತು. 12ಅದರಲ್ಲಿ ಎಲ್ಲಾ
ಬಗೆಯ ಪ್ರಾಣಿಗಳಿದ್ದವು, ಅಂದರೆ ನಡೆದಾಡುವ ಪ್ರಾಣಿಗಳು,
ಕ್ರಿಮಿಕೀಟಗಳು ಮತ್ತು ಹಾರಾಡುವ ಪಕ್ಷಿಗಳು ಇದ್ದವು. 13ಆಗ
ವಾಣಿಯೊಂದು, "ಪೇತ್ರನೇ, ಎದ್ದೇಳು! ಕೊಯ್ದು ತಿನ್ನು"
ಎಂದು ಹೇಳಿತು.
14ಆದರೆ ಪೇತ್ರನು, "ಪ್ರಭುವೇ, ನಾನು ಹಾಗೆ ಮಾಡಲಾರೆ!
ಅಪವಿತ್ರವಾದದ್ದನ್ನು ಮತ್ತು ಅಶುದ್ಧವಾದದ್ದನ್ನು ನಾನೆಂದೂ
ತಿಂದವನಲ್ಲ" ಎಂದು ಹೇಳಿದನು.
15 ಆದರೆ ಆ ವಾಣಿಯು ಅವನಿಗೆ, "ದೇವರು ಇವುಗಳನ್ನು
ಶುದ್ಧೀಕರಿಸಿದ್ದಾನೆ. ಇವುಗಳನ್ನು 'ಅಪವಿತ್ರ'ವೆಂದು ಹೇಳ
ಬೇಡ" ಎಂದು ಮತ್ತೆ ಹೇಳಿತು. 16ಹೀಗೆ ಮೂರು ಸಾರಿ
ಆಯಿತು. ಬಳಿಕ ಅವುಗಳನ್ನೆಲ್ಲ ಆಕಾಶಕ್ಕೆ ಹಿಂತೆಗೆದುಕೊಳ್ಳ
ಲಾಯಿತು.
17ಪೇತ್ರನು ತಾನು ಕಂಡ ಈ ದರ್ಶನದ ಅರ್ಥವೇನಿರ
ಬಹುದೆಂದು ಆಶ್ಚರ್ಯಗೊಂಡನು. ಅಷ್ಟರಲ್ಲಿಯೇ, ಕೊರ್ನೇ
ಲಿಯನು ಕಳುಹಿಸಿದ್ದ ಜನರು ಸೀಮೋನನ ಮನೆಯನ್ನು ಕಂಡು
ಕೊಂಡಿದ್ದರು. ಅವರು ಬಾಗಿಲ ಬಳಿಯಲ್ಲಿ ನಿಂತುಕೊಂಡು,
18"ಸೀಮೋನ್ ಪೇತ್ರನು ಇಲ್ಲಿ ವಾಸವಾಗಿರುವನೇ?" ಎಂದು
ಕೇಳಿದರು. 19ಈ ದರ್ಶನದ ಬಗ್ಗೆ ಪೇತ್ರನು ಇನ್ನೂ ಆಲೋಚಿಸು
ತ್ತಿದ್ದನು. ಆದರೆ ಪವಿತ್ರಾತ್ಮನು ಅವನಿಗೆ, "ಇಗೋ, ನಿನ್ನನ್ನು
ಮೂರು ಜನರು ಹುಡುಕುತ್ತಾ ಬಂದಿದ್ದಾರೆ. 20ನೀನೆದ್ದು
ಕೆಳಗಿಳಿದು ಅವರೊಂದಿಗೆ ಹೋಗು. ಯಾವ ಪ್ರಶ್ನೆಗಳನ್ನೂ
ಕೇಳಬೇಡ. ನಾನೇ ಅವರನ್ನು ನಿನ್ನ ಬಳಿಗೆ ಕಳುಹಿಸಿದ್ದೇನೆ"
ಎಂದು ಹೇಳಿದನು. 21ಆದ್ದರಿಂದ ಪೇತ್ರನು ಕೆಳಗಿಳಿದು ಆ ಜನರ

ಬಳಿಗೆ ಹೋಗಿ, ‘‘ನೀವು ಹುಡುಕುತ್ತಿರುವ ವ್ಯಕ್ತಿ ನಾನೇ, ನೀವು
ಇಲ್ಲಿಗೇಕೆ ಬಂದಿರಿ?’’ ಎಂದು ಕೇಳಿದನು.
[22]ಆ ಜನರು, ‘‘ಕೊರ್ನೇಲಿಯನು ಎಂಬ ಒಬ್ಬ ಸೇನಾಧಿ
ಕಾರಿ ಇದ್ದಾನೆ. ಅವನು ಧಾರ್ಮಿಕ ವ್ಯಕ್ತಿ. ಅವನು ದೇವರನ್ನು
ಆರಾಧಿಸುತ್ತಾನೆ. ಯೆಹೂದ್ಯ ಜನರೆಲ್ಲರೂ ಅವನನ್ನು ಗೌರವಿ
ಸುತ್ತಾರೆ. ನಿನ್ನನ್ನು ತನ್ನ ಮನೆಗೆ ಆಹ್ವಾನಿಸಿ ನೀನು ಹೇಳುವ
ಸಂಗತಿಗಳನ್ನು ಕೇಳಬೇಕೆಂದು ದೇವದೂತನೊಬ್ಬನು
ಕೊರ್ನೇಲಿಯನಿಗೆ ತಿಳಿಸಿದ್ದಾನೆ’’ ಎಂದು ಹೇಳಿದರು.
[23]ಪೇತ್ರನು ಅವರನ್ನು ಒಳಗೆ ಕರೆದು, ಆ ರಾತ್ರಿ ಅಲ್ಲೇ ಇರ
ಬೇಕೆಂದು ಕೇಳಿಕೊಂಡನು.

ಮರುದಿನ ಪೇತ್ರನು ಸಿದ್ಧನಾಗಿ, ಆ ಮೂವರೊಂದಿಗೆ
ಹೊರಟನು. ಜೊಪ್ಪದ ವಿಶ್ವಾಸಿಗಳಲ್ಲಿ ಕೆಲವರು ಅವನೊಂದಿಗೆ
ಹೋದರು. [24]ಮರುದಿನ ಅವರು ಸೆಜರೇಯ ಪಟ್ಟಣವನ್ನು
ತಲುಪಿದರು. ಕೊರ್ನೇಲಿಯನು ಅವರಿಗೋಸ್ಕರ ಕಾಯು
ತ್ತಿದ್ದನು. ಅವನು ತನ್ನ ಸಂಬಂಧಿಕರನ್ನು ಮತ್ತು ಆಪ್ತಸ್ನೇಹಿತರನ್ನು
ಆಗಲೇ ತನ್ನ ಮನೆಗೆ ಆಹ್ವಾನಿಸಿದ್ದನು. [25]ಪೇತ್ರನು ಮನೆಯನ್ನು
ಪ್ರವೇಶಿಸುತ್ತಿರಲು ಕೊರ್ನೇಲಿಯನು ಅವನನ್ನು ಎದುರು
ಗೊಂಡನು. ಕೊರ್ನೇಲಿಯನು ಪೇತ್ರನ ಪಾದಕ್ಕೆ ಅಡ್ಡಬಿದ್ದು
ಆರಾಧಿಸಿದನು. [26]ಆದರೆ ಪೇತ್ರನು ಅವನನ್ನು ಮೇಲಕ್ಕೆಬ್ಬಿಸಿ,
‘‘ಎದ್ದು ನಿಲ್ಲು! ನಾನು ನಿನ್ನಂತೆಯೇ ಕೇವಲ ಒಬ್ಬ ಮನುಷ್ಯ’’
ಎಂದು ಹೇಳಿದನು. [27]ಪೇತ್ರನು ಕೊರ್ನೇಲಿಯನೊಂದಿಗೆ
ಮಾತನ್ನು ಮುಂದುವರಿಸಿದನು. ಬಳಿಕ ಪೇತ್ರನು ಒಳಗೆ
ಹೋದಾಗ, ಅಲ್ಲಿ ನೆರೆದು ಬಂದಿದ್ದ ಜನರ ದೊಡ್ಡ ಗುಂಪನ್ನು
ಕಂಡನು. [28]ಪೇತ್ರನು ಅವರಿಗೆ, ‘‘ಯೆಹೂದ್ಯನೊಬ್ಬನು ಅನ್ಯ
ಜನರೊಂದಿಗೆ ಸಂಪರ್ಕವಿಟ್ಟುಕೊಳ್ಳುವುದಾಗಲಿ ಅವರನ್ನು
ಭೇಟಿಮಾಡುವುದಾಗಲಿ ನಮ್ಮ ಯೆಹೂದ್ಯಧರ್ಮಶಾಸ್ತ್ರಕ್ಕೆ
ವಿರುದ್ಧವಾದದ್ದು ಎಂಬುದು ನಿಮಗೆ ಗೊತ್ತೇ ಇದೆ. ಆದರೆ
ಯಾವ ವ್ಯಕ್ತಿಯನ್ನೂ ಅಪವಿತ್ರನೆಂದಾಗಲಿ ಅಶುದ್ಧನೆಂದಾಗಲಿ
ಕರೆಯಕೂಡದೆಂದು ದೇವರು ನನಗೆ ತೋರಿಸಿಕೊಟ್ಟಿದ್ದಾನೆ.
[29]ಆದ್ದರಿಂದ, ನನ್ನನ್ನು ಇಲ್ಲಿಗೆ ಬರಬೇಕೆಂದು ಕರೆದ ಜನ
ರೊಂದಿಗೆ ನಾನು ವಾದಮಾಡಲಿಲ್ಲ. ಆದರೆ ನೀವು ನನ್ನನ್ನು
ಯಾಕೆ ಕರೆಸಿದಿರೆಂದು ದಯವಿಟ್ಟು ಈಗ ಹೇಳಿರಿ’’ ಎಂದನು.

[30]ಆಗ ಕೊರ್ನೇಲಿಯನು, ‘‘ನಾಲ್ಕು ದಿನಗಳ ಹಿಂದೆ, ನಾನು
ನನ್ನ ಮನೆಯಲ್ಲಿ ಪ್ರಾರ್ಥಿಸುತ್ತಿದ್ದೆನು. ಆಗ ಮಧ್ಯಾಹ್ನ ಸುಮಾರು
ಮೂರು ಗಂಟೆ ಸಮಯವಾಗಿತ್ತು. ಇದ್ದಕ್ಕಿದ್ದಂತೆ ಒಬ್ಬ
ಮನುಷ್ಯನು ನನ್ನ ಮುಂದೆ ನಿಂತನು. ಅವನು ಧರಿಸಿಕೊಂಡಿದ್ದ
ಬಟ್ಟೆಗಳು ಪ್ರಕಾಶಮಾನವಾಗಿ ಹೊಳೆಯುತ್ತಿದ್ದವು. [31]ಆ
ಮನುಷ್ಯನು, ‘ಕೊರ್ನೇಲಿಯನೇ! ದೇವರು ನಿನ್ನ ಪ್ರಾರ್ಥನೆ
ಯನ್ನು ಕೇಳಿದ್ದಾನೆ. ನೀನು ಬಡಜನರಿಗೆ ಕೊಡುವಂಥವು
ಗಳನ್ನು ನೋಡಿದ್ದಾನೆ. ದೇವರು ನಿನ್ನನ್ನು ಮೆಚ್ಚಿಕೊಂಡಿದ್ದಾನೆ.
[32]ಆದ್ದರಿಂದ ಕೆಲವು ಜನರನ್ನು ಜೊಪ್ಪ ಪಟ್ಟಣಕ್ಕೆ ಕಳುಹಿಸಿ
ಸೀಮೋನ್ ಪೇತ್ರನನ್ನು ಬರಬೇಕೆಂದು ಕೇಳಿಕೊ. ಪೇತ್ರನು
ಚರ್ಮಕಾರನಾದ ಸೀಮೋನ ಎಂಬವನ ಮನೆಯಲ್ಲಿ ಇಳಿದು
ಕೊಂಡಿದ್ದಾನೆ. ಅವನ ಮನೆಯು ಸಮುದ್ರ ತೀರದಲ್ಲಿದೆ’
ಎಂದನು. [33]ಆದ್ದರಿಂದ, ನಾನು ತಕ್ಷಣ ನಿನಗೆ ಕರೆಕಳುಹಿಸಿದೆ.
ನೀನು ಇಲ್ಲಿಗೆ ಬಂದದ್ದು ಉಪಕಾರವಾಯಿತು. ನಮಗೆ ತಿಳಿಸ
ಬೇಕೆಂದು ಪ್ರಭುವು ನಿನಗೆ ಆಜ್ಞಾಪಿಸಿರುವ ಪ್ರತಿಯೊಂದನ್ನು
ಕೇಳಲು ನಾವೆಲ್ಲರು ದೇವರ ಸನ್ನಿಧಿಯಲ್ಲಿ ಸೇರಿದ್ದೇವೆ’’ ಎಂದು
ಹೇಳಿದನು.

### ಕೊರ್ನೇಲಿಯನ ಮನೆಯಲ್ಲಿ ಪೇತ್ರನ ಪ್ರಸಂಗ

[34]ಪೇತ್ರನು ಮಾತಾಡಲಾರಂಭಿಸಿ ಇಂತೆಂದನು:
‘‘ದೇವರಿಗೆ ಎಲ್ಲರೂ ಒಂದೇ ಎಂಬುದು ನನಗೆ ಈಗ ಅರ್ಥ
ವಾಯಿತು. [35]ತನ್ನನ್ನು ಆರಾಧಿಸುವ ನೀತಿವಂತರು ಯಾರೇ
ಆಗಿದ್ದರೂ ಅವರನ್ನು ದೇವರು ಸ್ವೀಕರಿಸಿಕೊಳ್ಳುವನು. ಅವನು
ಯಾವ ದೇಶದವನು ಎಂಬುದು ಮುಖ್ಯವಲ್ಲ. [36]ದೇವರು
ಯೆಹೂದ್ಯ ಜನರೊಂದಿಗೆ ಮಾತಾಡಿದ್ದಾನೆ. ಯೇಸು ಕ್ರಿಸ್ತನ
ಮೂಲಕವಾಗಿ ಶಾಂತಿ ಬಂದಿದೆ ಎಂಬ ಸುವಾರ್ತೆಯನ್ನು
ದೇವರು ಅವರಿಗೆ ಕಳುಹಿಸಿದನು. ಯೇಸುವು ಎಲ್ಲಾ ಜನರಿಗೆ
ಪ್ರಭುವಾಗಿದ್ದಾನೆ! [37]ಜುದೇಯದಲ್ಲೆಲ್ಲಾ ಏನಾಯಿತೆಂಬುದು
ನಿಮಗೆ ಗೊತ್ತಿದೆ. ಗಲಿಲಾಯದಲ್ಲಿ ಯೋಹಾನನು* ದೀಕ್ಷಾ
ಸ್ನಾನದ ಬಗ್ಗೆ ಜನರಿಗೆ ಬೋಧಿಸಿದ ಮೇಲೆ ಅದು ಆರಂಭ
ವಾಯಿತು. [38]ನಜರೇತಿನ ಯೇಸುವಿನ ಬಗ್ಗೆ ನಿಮಗೆ ಗೊತ್ತಿದೆ.
ದೇವರು ಆತನಿಗೆ ಪವಿತ್ರಾತ್ಮನನ್ನೂ ಶಕ್ತಿಯನ್ನೂ ಕೊಡುವುದರ
ಮೂಲಕ ಆತನನ್ನು ಅಭಿಷೇಕಿಸಿದನು. ಆತನು ಎಲ್ಲಾ
ಕಡೆಗಳಲ್ಲೂ ಜನರಿಗೆ ಒಳ್ಳೆಯದನ್ನು ಮಾಡುತ್ತಾ ಸಂಚರಿಸಿ
ದನು. ದೆವ್ವದಿಂದ ಪೀಡಿತರಾಗಿದ್ದವರನ್ನು ಯೇಸು ಗುಣಪಡಿಸಿ
ದನು. ದೇವರು ಯೇಸುವಿನೊಂದಿಗೆ ಇದ್ದನೆಂಬುದನ್ನು ಇದು
ತೋರಿಸಿಕೊಟ್ಟಿತು. [39]ಜುದೇಯದಲ್ಲಿ ಮತ್ತು ಜೆರುಸಲೇಮಿ
ನಲ್ಲಿ ಯೇಸು ಮಾಡಿದ ಎಲ್ಲಾ ಕಾರ್ಯಗಳನ್ನು ನಾವು ನೋಡಿ
ದೆವು. ಆ ಕಾರ್ಯಗಳಿಗೆ ನಾವು ಸಾಕ್ಷಿಗಳಾಗಿದ್ದೇವೆ. ಆದರೆ
ಯೇಸು ಕೊಲ್ಲಲ್ಪಟ್ಟನು. ಅವರು ಆತನನ್ನು ಮರದ ಶಿಲುಬೆಗೆ
ಏರಿಸಿದರು. [40]ಆದರೆ, ದೇವರು ಆತನನ್ನು ಮೂರನೆಯ
ದಿನದಲ್ಲಿ ಜೀವಂತವಾಗಿ ಎಬ್ಬಿಸಿದನು! ಯೇಸುವನ್ನು ಸ್ಪಷ್ಟವಾಗಿ
ನೋಡುವ ಅವಕಾಶವನ್ನು ದೇವರು ಜನರಿಗೆ ಒದಗಿಸಿ
ಕೊಟ್ಟನು. [41]ಆದರೆ ಯೇಸುವು ಎಲ್ಲಾ ಜನರಿಗೆ ಕಾಣಿಸಿ
ಕೊಳ್ಳಲಿಲ್ಲ. ದೇವರಿಂದ ಮೊದಲೇ ಸಾಕ್ಷಿಗಳಾಗಿ ಆಯ್ಕೆಗೊಂಡಿ
ದ್ದವರು ಮಾತ್ರ ಆತನನ್ನು ಕಂಡರು! ನಾವೇ ಆ ಸಾಕ್ಷಿಗಳು!
ಯೇಸು ಜೀವಂತವಾಗಿ ಎದ್ದು ಬಂದ ಮೇಲೆ ನಾವು ಆತ
ನೊಂದಿಗೆ ಊಟಮಾಡಿದೆವು ಮತ್ತು ಪಾನೀಯವನ್ನು
ಕುಡಿದೆವು. [42]ಜನರಿಗೆ ಬೋಧಿಸಬೇಕೆಂದು ಯೇಸು ನಮಗೆ
ಹೇಳಿದನು. ಜೀವಂತವಾಗಿರುವ ಜನರಿಗೂ ಮತ್ತು ಸತ್ತು
ಹೋಗಿರುವ ಜನರಿಗೂ ದೇವರಿಂದ ನ್ಯಾಯಾಧಿಪತಿಯಾಗಿ
ಆಯ್ಕೆಯಾಗಿರುವ ವ್ಯಕ್ತಿ ತಾನೇ ಎಂಬುದನ್ನು ಜನರಿಗೆ
ತಿಳಿಸಬೇಕೆಂದು ಆತನು ನಮಗೆ ಹೇಳಿದನು. [43]ಯೇಸುವಿನಲ್ಲಿ
ನಂಬಿಕೆ ಇಡುವ ಪ್ರತಿಯೊಬ್ಬನ ಪಾಪಗಳನ್ನು ದೇವರು ಯೇಸು
ವಿನ ಮೂಲಕ ಕ್ಷಮಿಸುವನು. ಇದು ಸತ್ಯವೆಂದು ಪ್ರವಾದಿಗಳು
ಹೇಳಿದ್ದಾರೆ.’’

### ಯೆಹೂದ್ಯರಲ್ಲದವರ ಮೇಲೆ ಪವಿತ್ರಾತ್ಮನು ಇಳಿದು ಬರುವನು

[44]ಪೇತ್ರನು ಇನ್ನೂ ಹೀಗೆ ಹೇಳುತ್ತಿರುವಾಗಲೇ, ಅವನ
ಉಪದೇಶವನ್ನು ಕೇಳುತ್ತಿದ್ದವರ ಮೇಲೆ ಪವಿತ್ರಾತ್ಮನು

---

**ಯೋಹಾನನು** ಸ್ನಾನಿಕ ಯೋಹಾನನು.

ಇಳಿದುಬಂದನು. 45ಪೇತ್ರನೊಂದಿಗೆ ಬಂದಿದ್ದ ಯೆಹೂದ್ಯ
ವಿಶ್ವಾಸಿಗಳು ವಿಸ್ಮಿತರಾದರು. ಯೆಹೂದ್ಯರಲ್ಲದ ಜನರಿಗೂ ಸಹ
ಪವಿತ್ರಾತ್ಮಧಾರೆಯಾದದ್ದನ್ನು ಕಂಡು ಅವರು ಆಶ್ಚರ್ಯ
ಪಟ್ಟರು. 46ಅವರು ಬೇರೆಬೇರೆ ಭಾಷೆಗಳನ್ನು ಮಾತಾಡುತ್ತಾ
ದೇವರಿಗೆ ಸ್ತೋತ್ರ ಸಲ್ಲಿಸುತ್ತಿರುವುದನ್ನು ಆ ಯೆಹೂದ್ಯ ವಿಶ್ವಾಸಿ
ಗಳು ಕೇಳಿದರು. ಬಳಿಕ ಪೇತ್ರನು, 47“ನೀರಿನಲ್ಲಿ ದೀಕ್ಷಾಸ್ನಾನ
ತೆಗೆದುಕೊಳ್ಳದಂತೆ ನಾವು ಈ ಜನರಿಗೆ ಅಡ್ಡಿಮಾಡಲು
ಸಾಧ್ಯವಿಲ್ಲ. ನಾವು ಹೊಂದಿಕೊಂಡಂತೆ ಇವರೂ ಪವಿತ್ರಾತ್ಮ
ನನ್ನು ಹೊಂದಿಕೊಂಡರು!” ಎಂದು ಹೇಳಿ, 48ಯೇಸು ಕ್ರಿಸ್ತನ
ಹೆಸರಿನಲ್ಲಿ ದೀಕ್ಷಾಸ್ನಾನ ತೆಗೆದುಕೊಳ್ಳಲು ಅವರಿಗೆ ಅಪ್ಪಣೆ
ಕೊಟ್ಟನು. ಬಳಿಕ ಅವರು ತಮ್ಮೊಂದಿಗೆ ಕೆಲವು ದಿನಗಳವರೆಗೆ
ಇರಬೇಕೆಂದು ಪೇತ್ರನನ್ನು ಕೇಳಿಕೊಂಡರು.

### ಪೇತ್ರನು ಜೆರುಸಲೇಮಿಗೆ ಹಿಂತಿರುಗುವನು

11 ಯೆಹೂದ್ಯರಲ್ಲದವರು ಸಹ ದೇವರ ವಾಕ್ಯವನ್ನು
ಸ್ವೀಕರಿಸಿಕೊಂಡರೆಂಬುದು ಅಪೊಸ್ತಲರಿಗೂ
ಜುದೇಯದ ಸಹೋದರರಿಗೂ ತಿಳಿಯಿತು. 2ಆದರೆ ಪೇತ್ರನು
ಜೆರುಸಲೇಮಿಗೆ ಬಂದಾಗ ಕೆಲವು ಯೆಹೂದ್ಯ ವಿಶ್ವಾಸಿಗಳು*
ಅವನೊಂದಿಗೆ ವಾದ ಮಾಡಿದರು. 3ಅವರು, “ಯೆಹೂದ್ಯ
ರಲ್ಲದವರ ಮತ್ತು ಸುನ್ನತಿ ಮಾಡಿಸಿಕೊಂಡಿಲ್ಲದವರ ಮನೆಗಳಿಗೆ
ನೀನು ಹೋದೆ! ನೀನು ಅವರೊಂದಿಗೆ ಊಟವನ್ನು ಸಹ
ಮಾಡಿದೆ!” ಎಂದು ಹೇಳಿದರು.

4ಆದ್ದರಿಂದ ಪೇತ್ರನು ನಡೆದ ಸಂಗತಿಯನ್ನೆಲ್ಲಾ ಅವರಿಗೆ
ವಿವರಿಸಿದನು. 5ಪೇತ್ರನು ಅವರಿಗೆ, “ನಾನು ಜೊಪ್ಪ
ಪಟ್ಟಣದಲ್ಲಿದ್ದೆನು. ನಾನು ಪ್ರಾರ್ಥಿಸುತ್ತಿದ್ದಾಗ ನನಗೊಂದು
ದರ್ಶನವಾಯಿತು. ಆ ದರ್ಶನದಲ್ಲಿ, ಆಕಾಶದಿಂದ ಇಳಿದು
ಬರುತ್ತಿರುವ ಒಂದು ವಸ್ತುವನ್ನು ಕಂಡೆನು. ಅದು ದೊಡ್ಡ
ತಟ್ಟೆಯಂತಿತ್ತು. ಅದರ ನಾಲ್ಕು ಮೂಲೆಗಳಲ್ಲಿ ಹಗ್ಗವನ್ನು ಕಟ್ಟಿ
ಭೂಮಿಗೆ ಇಳಿಯ ಬಿಡಲಾಗಿತ್ತು. ಅದು ಇಳಿದು ಬಂದು ನನ್ನ
ಸಮೀಪದಲ್ಲೇ ನಿಂತುಕೊಂಡಿತು. 6ನಾನು ಅದರೊಳಗೆ
ನೋಡಿದೆನು. ಅದರಲ್ಲಿ ಪಶುಗಳೂ ಕ್ರೂರಪ್ರಾಣಿಗಳೂ
ಹರಿದಾಡುವ ಕ್ರಿಮಿಕೀಟಗಳೂ ಹಾರಾಡುವ ಪಕ್ಷಿಗಳೂ
ಇದ್ದವು. 7ಆಗ, ‘ಪೇತ್ರನೇ, ಎದ್ದೇಳು! ಇವುಗಳಲ್ಲಿ ಯಾವುದನ್ನು
ಬೇಕಾದರೂ ಕೊಯ್ದುತಿನ್ನು!’ ಎಂದು ನನಗೆ ಹೇಳುವ
ವಾಣಿಯನ್ನು ಕೇಳಿದೆನು. 8ಆದರೆ ನಾನು, ‘ಪ್ರಭುವೇ, ನಾನು
ಹಾಗೆ ಮಾಡಲಾರೆ! ಅಪವಿತ್ರವಾದ ಮತ್ತು ಅಶುದ್ಧವಾದ
ಏನನ್ನಾಗಲಿ ನಾನೆಂದೂ ತಿಂದಿಲ್ಲ, ಎಂದು ಹೇಳಿದೆನು. 9ಆದರೆ,
‘ಇವುಗಳನ್ನು ದೇವರು ಶುದ್ಧೀಕರಿಸಿದ್ದಾನೆ. ಇವುಗಳನ್ನು ಅಶುದ್ಧ
ವೆಂದು ಹೇಳಬೇಡ!’ ಎಂದು ಆ ವಾಣಿಯು ನನಗೆ ಉತ್ತರ
ಕೊಟ್ಟಿತು. 10ಹೀಗೆ ಮೂರು ಸಲವಾಯಿತು. ಬಳಿಕ ಆ ಇಡೀ
ವಸ್ತುವನ್ನು ಆಕಾಶಕ್ಕೆ ಹಿಂತೆಗೆದುಕೊಳ್ಳಲಾಯಿತು. 11ಅದೇ
ಸಮಯದಲ್ಲಿ ನಾನಿದ್ದ ಮನೆಗೆ ಮೂರು ಮಂದಿ ಬಂದರು. ಈ
ಮೂವರನ್ನು ಸೆಜರೇಯ ಪಟ್ಟಣದಿಂದ ಕಳುಹಿಸಲಾಗಿತ್ತು.
12ಸಂದೇಹಪಡದೆ ಅವರೊಂದಿಗೆ ಹೋಗಬೇಕೆಂದು ಪವಿ
ತ್ರಾತ್ಮನು ನನಗೆ ಹೇಳಿದನು. ಇಲ್ಲಿರುವ ಈ ಆರು ಮಂದಿ
ಸಹೋದರರು ನನ್ನೊಂದಿಗೆ ಬಂದರು. ನಾವು ಕೊರ್ನೇಲಿಯನ
ಮನೆಗೆ ಹೋದೆವು. 13ತನ್ನ ಮನೆಯಲ್ಲಿ ದೇವದೂತನೊಬ್ಬನು
ನಿಂತಿರುವುದನ್ನು ತಾನು ಕಂಡದ್ದರ ಬಗ್ಗೆ ಕೊರ್ನೇಲಿಯನು
ನನಗೆ ಹೇಳಿದನು. ಆ ದೇವದೂತನು ಕೊರ್ನೇಲಿಯನಿಗೆ,
‘ಕೆಲವು ಜನರನ್ನು ಜೊಪ್ಪಕ್ಕೆ ಕಳುಹಿಸು. ಸೀಮೋನ್ ಪೇತ್ರನನ್ನು
ಆಹ್ವಾನಿಸಿ ನಿಮ್ಮ ಬಳಿಗೆ ಬರಮಾಡಿಕೊ. 14ಅವನು ನಿಮ್ಮೊಂದಿಗೆ
ಮಾತಾಡುವನು. ಅವನು ಹೇಳುವ ಸಂಗತಿಗಳು ನಿನ್ನನ್ನೂ ನಿನ್ನ
ಕುಟುಂಬದವರನ್ನೂ ರಕ್ಷಿಸುತ್ತವೆ’ ಎಂದು ಹೇಳಿದನು. 15ನಾನು
ನನ್ನ ಉಪದೇಶವನ್ನು ಆರಂಭಿಸಿದ ಮೇಲೆ, ಪ್ರಾರಂಭದಲ್ಲಿ*
ಪವಿತ್ರಾತ್ಮನು ನಮ್ಮ ಮೇಲೆ ಬಂದಂತೆ ಅವರ ಮೇಲೆಯೂ
ಬಂದನು. 16ಆಗ ನಾನು ಪ್ರಭುವಿನ ಮಾತುಗಳನ್ನು ಜ್ಞಾಪಿಸಿ
ಕೊಂಡೆನು. ‘ಯೋಹಾನನು ಜನರಿಗೆ ನೀರಿನಲ್ಲಿ ದೀಕ್ಷಾಸ್ನಾನ
ಮಾಡಿಸಿದನು, ಆದರೆ ನೀವು ಪವಿತ್ರಾತ್ಮನಲ್ಲಿ ದೀಕ್ಷಾಸ್ನಾನ ಪಡೆ
ಯುವಿರಿ!’ ಎಂದು ಪ್ರಭುವು ಹೇಳಿದ್ದನು. 17ಪ್ರಭುವಾದ
ಯೇಸು ಕ್ರಿಸ್ತನಲ್ಲಿ ನಂಬಿಕೆಯಿಟ್ಟ ನಮಗೆ ಕೊಟ್ಟ ವರವನ್ನೇ
ದೇವರು ಈ ಜನರಿಗೆ ಕೊಟ್ಟನು. ಹೀಗಿರಲು ನಾನು ದೇವರ
ಕೆಲಸವನ್ನು ನಿಲ್ಲಿಸಲು ಸಾಧ್ಯವಿರಲಿಲ್ಲ” ಎಂದು ಹೇಳಿದನು.

18ಯೆಹೂದ್ಯವಿಶ್ವಾಸಿಗಳು ಈ ಸಂಗತಿಗಳನ್ನು ಕೇಳಿದಾಗ
ವಾದವನ್ನು ನಿಲ್ಲಿಸಿ, ದೇವರನ್ನು ಸ್ತುತಿಸುತ್ತಾ“ ಹಾಗಾದರೆ
ನಮ್ಮಂತೆಯೇ ತಮ್ಮ ಹೃದಯಗಳನ್ನು ಮಾರ್ಪಡಿಸಿಕೊಂಡು
ಜೀವವನ್ನು ಹೊಂದಿಕೊಳ್ಳಲು ದೇವರು ಯೆಹೂದ್ಯರಲ್ಲ
ದವರಿಗೂ ಅವಕಾಶ ಕೊಟ್ಟಿದ್ದಾನೆ!”ಎಂದು ಹೇಳಿದರು.

### ಅಂತಿಯೋಕ್ಯಕ್ಕೆ ಸುವಾರ್ತೆ

19ಸ್ತೆಫನನು ಕೊಲ್ಲಲ್ಪಟ್ಟ ನಂತರ ಉಂಟಾದ ಹಿಂಸೆ
ಯಿಂದಾಗಿ ವಿಶ್ವಾಸಿಗಳು ಚದರಿಹೋದರು. ವಿಶ್ವಾಸಿಗಳಲ್ಲಿ
ಕೆಲವರು ಬಹುದೂರದ ಸ್ಥಳಗಳಾದ ಫೆನಿಷ್ಯ, ಸೈಪ್ರಸ್ ಮತ್ತು
ಅಂತಿಯೋಕ್ಯಗಳಿಗೆ ಹೋದರು. ವಿಶ್ವಾಸಿಗಳು ಈ ಸ್ಥಳಗಳಲ್ಲಿ
ಸುವಾರ್ತೆಯನ್ನು ತಿಳಿಸಿದರು. ಆದರೆ ಅವರು ಯೆಹೂದ್ಯರಿಗೆ
ಮಾತ್ರ ತಿಳಿಸಿದರು. 20ಈ ವಿಶ್ವಾಸಿಗಳಲ್ಲಿ ಕೆಲವರು ಸೈಪ್ರಸ್
ಮತ್ತು ಸಿರೇನ್ ಸ್ಥಳಗಳವರಾಗಿದ್ದರು. ಈ ಜನರು ಅಂತಿ
ಯೋಕ್ಯಕ್ಕೆ ಬಂದಾಗ ಅವರು, ಪ್ರಭುವಾದ ಯೇಸುವಿನ ವಿಷಯ
ವಾದ ಸುವಾರ್ತೆಯನ್ನು ಅಲ್ಲಿಯ ಗ್ರೀಕ್ ಜನರಿಗೆ ತಿಳಿಸಿದರು.
21ಪ್ರಭುವು ವಿಶ್ವಾಸಿಗಳಿಗೆ ಸಹಾಯ ಮಾಡುತ್ತಿದ್ದನು. ಜನರು
ಬಹು ಸಂಖ್ಯೆಯಲ್ಲಿ ಪ್ರಭುವನ್ನು ನಂಬಿಕೊಂಡು ಅನುಸರಿಸ
ತೊಡಗಿದರು.

22ಅಂತಿಯೋಕ್ಯದಲ್ಲಿದ್ದ ಈ ಹೊಸ ವಿಶ್ವಾಸಿಗಳ ಬಗ್ಗೆ ಜೆರುಸ
ಲೇಮಿನ ಸಭೆಯವರಿಗೆ ತಿಳಿಯಿತು. ಆದ್ದರಿಂದ ಜೆರುಸಲೇಮಿನ
ವಿಶ್ವಾಸಿಗಳು ಬಾರ್ನಬನನ್ನು ಅಂತಿಯೋಕ್ಯಕ್ಕೆ ಕಳುಹಿಸಿದರು.

23-24ಬಾರ್ನಬನು ಒಳ್ಳೆಯ ಮನುಷ್ಯನಾಗಿದ್ದನು. ಅವನು
ಪವಿತ್ರಾತ್ಮಭರಿತನಾಗಿದ್ದನು ಮತ್ತು ಪೂರ್ಣನಂಬಿಕೆಯುಳ್ಳವ
ನಾಗಿದ್ದನು. ಬಾರ್ನಬನು ಅಂತಿಯೋಕ್ಯಕ್ಕೆ ಹೋದಾಗ,
ದೇವರು ಆ ಜನರನ್ನು ಅಧಿಕವಾಗಿ ಆಶೀರ್ವದಿಸಿರುವುದನ್ನು
ಕಂಡನು. ಇದರಿಂದ ಬಾರ್ನಬನಿಗೆ ತುಂಬಾ ಸಂತೋಷ

---

**ಯೆಹೂದ್ಯ ವಿಶ್ವಾಸಿಗಳು** ಅಕ್ಷರಶಃ “ಸುನ್ನತಿಯಾದವರು”. ಕ್ರೈಸ್ತರೆಲ್ಲಾ ಸುನ್ನತಿ ಮಾಡಿಸಿಕೊಳ್ಳಬೇಕು ಮತ್ತು ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯರಾಗಬೇಕು ಎಂದು ಹೇಳುತ್ತಿದ್ದ ಯೆಹೂದ್ಯರೆಂಬ ಅರ್ಥವನ್ನು ಇದು ಕೊಡಬಹುದು.

**ಪ್ರಾರಂಭ** ಪಂಚಶತ್ತಮ ದಿನದಂದು ಆರಂಭವಾದ ಸಭೆ.

ವಾಯಿತು. ಅಂತಿಯೋಕ್ಯದಲ್ಲಿದ್ದ ವಿಶ್ವಾಸಿಗಳನ್ನೆಲ್ಲ ಅವನು
ಪ್ರೋತ್ಸಾಹಿಸಿದನು. ಅವನು ಅವರಿಗೆ, ‘‘ನಿಮ್ಮ ನಂಬಿಕೆಯನ್ನು
ಎಂದಿಗೂ ಕಳೆದುಕೊಳ್ಳಬೇಡಿ. ಪ್ರಭುವಿಗೆ ನಿಮ್ಮ ಪೂರ್ಣ
ಹೃದಯಗಳಿಂದ ಯಾವಾಗಲೂ ವಿಧೇಯರಾಗಿರಿ’’ ಎಂದು
ಹೇಳಿದನು. ಅನೇಕ ಜನರು ಪ್ರಭುವಾದ ಯೇಸುವಿನ ಹಿಂಬಾ
ಲಕರಾದರು.

25ಬಳಿಕ ಬಾರ್ನಬನು ಸೌಲನನ್ನು ಹುಡುಕಿಕೊಂಡು
ತಾರ್ಸಸ್ ಪಟ್ಟಣಕ್ಕೆ ಹೋದನು. 26ಬಾರ್ನಬನು ಅಲ್ಲಿ ಸೌಲ
ನನ್ನು ಕಂಡುಕೊಂಡು ಅವನನ್ನು ಅಂತಿಯೋಕ್ಯಕ್ಕೆ ಕರೆದು
ಕೊಂಡು ಬಂದನು. ಸೌಲನು ಮತ್ತು ಬಾರ್ನಬನು ಅಂತಿ
ಯೋಕ್ಯದಲ್ಲಿ ಒಂದು ವರ್ಷ ಪೂರ್ತಿ ಸಭೆಯ ಅನ್ಯೋನ್ಯತೆ
ಯಲ್ಲಿ ಇದ್ದುಕೊಂಡು ಅನೇಕ ಜನರಿಗೆ ಬೋಧಿಸಿದರು.
ಯೇಸುವಿನ ಹಿಂಬಾಲಕರಿಗೆ ‘ಕ್ರೈಸ್ತರು’ ಎಂಬ ಹೆಸರು ಬಂದದ್ದು
ಅಂತಿಯೋಕ್ಯದಲ್ಲೇ.

27ಆ ಕಾಲದಲ್ಲಿ ಕೆಲವು ಪ್ರವಾದಿಗಳು ಜೆರುಸಲೇಮಿನಿಂದ
ಅಂತಿಯೋಕ್ಯಕ್ಕೆ ಹೋದರು. 28ಈ ಪ್ರವಾದಿಗಳಲ್ಲಿ ‘ಅಗಬ’
ಎಂಬ ಒಬ್ಬನಿದ್ದನು. ಅಗಬನು ಅಂತಿಯೋಕ್ಯದಲ್ಲಿ ಪವಿತ್ರಾತ್ಮನ
ಪ್ರೇರಣೆಯಿಂದ, ‘‘ಇಡೀ ಪ್ರಪಂಚಕ್ಕೆ ಭೀಕರ ಕ್ಷಾಮ ಬರಲಿದೆ’’
ಎಂದು ಹೇಳಿದನು. (ಈ ಬರಗಾಲವು ಕ್ಲಾಡಿಯಸ್ ಚಕ್ರ
ವರ್ತಿಯ ಕಾಲದಲ್ಲಿ ಬಂದಿತು.) 29ಜುದೇಯದಲ್ಲಿರುವ
ಸಹೋದರ ಸಹೋದರಿಯರಿಗೆ ಸಹಾಯಮಾಡಲು ವಿಶ್ವಾಸಿ
ಗಳು ನಿರ್ಧರಿಸಿದರು. ವಿಶ್ವಾಸಿಗಳಲ್ಲಿ ಪ್ರತಿಯೊಬ್ಬರೂ
ತಮ್ಮಿಂದಾದಷ್ಟನ್ನು ಅವರಿಗೆ ಕಳುಹಿಸಿಕೊಡಲು ಯೋಜನೆ
ಮಾಡಿದರು. 30ಅವರು ಹಣವನ್ನು ಕೂಡಿಸಿ ಬಾರ್ನಬ ಮತ್ತು
ಸೌಲರಿಗೆ ಕೊಟ್ಟರು. ಬಳಿಕ ಬಾರ್ನಬ ಮತ್ತು ಸೌಲರು ಅದನ್ನು
ತಂದು ಜುದೇಯದಲ್ಲಿದ್ದ ಸಭಾ ಹಿರಿಯರಿಗೆ ಕೊಟ್ಟರು.

## ಹೆರೋದ ಅಗ್ರಿಪ್ಪನಿಂದ ಸಭೆಗೆ ಹಿಂಸೆ

12 ಆ ಕಾಲದಲ್ಲಿ ರಾಜ ಹೆರೋದನು ಸಭೆಯವರಲ್ಲಿ ಕೆಲ
ವರನ್ನು ಹಿಂಸಿಸತೊಡಗಿ, 2ಯಾಕೋಬನನ್ನು ಕತ್ತಿ
ಯಿಂದ ಕೊಲ್ಲಿಸಿದನು. ಯಾಕೋಬನು ಯೋಹಾನನ ಅಣ್ಣ.
3ಯೆಹೂದ್ಯರು ಇದನ್ನು ಮೆಚ್ಚಿಕೊಂಡರೆಂಬುದು ಹೆರೋದ
ನಿಗೆ ತಿಳಿಯಿತು. ಆದ್ದರಿಂದ ಅವನು ಪೇತ್ರನನ್ನು ಬಂಧಿಸಿ( ಇದು
ನಡೆದದ್ದು ಯೆಹೂದ್ಯರ ಪಸ್ಕಹಬ್ಬದ ಕಾಲದಲ್ಲಿ.) ಸೆರೆಮನೆಗೆ
ಹಾಕಿಸಿದನು. 4ಹದಿನಾರು ಮಂದಿ ಸಿಪಾಯಿಗಳು ಪೇತ್ರನನ್ನು
ಕಾಯುತ್ತಿದ್ದರು. ಪಸ್ಕಹಬ್ಬದ ಕಾಲ ಮುಗಿದೊಡನೆ ಪೇತ್ರನನ್ನು
ಜನರ ಮುಂದೆ ನಿಲ್ಲಿಸಬೇಕೆಂದಿದ್ದನು. 5ಹೀಗೆ ಪೇತ್ರನು
ಸೆರೆಮನೆಯಲ್ಲಿದ್ದಾಗ ಸಭೆಯವರು ಅವನಿಗಾಗಿ ಎಡಬಿಡದೆ
ದೇವರಲ್ಲಿ ಪ್ರಾರ್ಥಿಸುತ್ತಿದ್ದರು.

## ಪೇತ್ರನಿಗೆ ಸೆರೆಮನೆಯಿಂದ ಬಿಡುಗಡೆ

6ಪೇತ್ರನು ಇಬ್ಬರು ಸೈನಿಕರ ಮಧ್ಯೆ ನಿದ್ರೆಮಾಡುತ್ತಿದ್ದನು.
ಅವನನ್ನು ಎರಡು ಸರಪಣಿಗಳಿಂದ ಕಟ್ಟಲಾಗಿತ್ತು. ಅನೇಕ
ಸೈನಿಕರು ಸೆರೆಮನೆಯ ಬಾಗಿಲನ್ನು ಕಾಯುತ್ತಿದ್ದರು. ಆಗ
ರಾತ್ರಿಯಾಗಿತ್ತು. ಮರುದಿನ ಪೇತ್ರನನ್ನು ಜನರ ಮುಂದೆ ತರ
ಬೇಕೆಂದು ಹೆರೋದನು ಯೋಚಿಸಿಕೊಂಡಿದ್ದನು. 7ಇದ್ದಕ್ಕಿ
ದ್ದಂತೆ, ಪ್ರಭುವಿನ ದೂತನೊಬ್ಬನು ಅಲ್ಲಿ ನಿಂತುಕೊಂಡನು.
ಬೆಳಕು ಕೋಣೆಯಲ್ಲಿ ಪ್ರಕಾಶಿಸಿತು. ದೇವದೂತನು ಪೇತ್ರನ
ಪಕ್ಕೆಯನ್ನು ಮುಟ್ಟಿ ಅವನನ್ನು ಎಬ್ಬಿಸಿ, ‘‘ಬೇಗನೆ ಎದ್ದೇಳು!’’
ಎಂದನು. ಆ ಕೂಡಲೆ ಸರಪಣಿಗಳು ಪೇತ್ರನ ಕೈಗಳಿಂದ
ಕಳಚಿಬಿದ್ದವು. 8ದೇವದೂತನು ಪೇತ್ರನಿಗೆ, ‘‘ಬಟ್ಟೆ ಧರಿಸಿಕೋ,
ಪಾದರಕ್ಷೆಗಳನ್ನು ಮೆಟ್ಟಿಕೋ’’ ಎಂದು ಹೇಳಿದನು. ಅಂತೆಯೇ
ಪೇತ್ರನು ಮಾಡಿದನು. ಬಳಿಕ ದೇವದೂತನು, ‘‘ನಿನ್ನ ಮೇಲಂಗಿ
ಯನ್ನು ಧರಿಸಿಕೊಂಡು ನನ್ನನ್ನು ಹಿಂಬಾಲಿಸು’’ ಎಂದನು.
9ದೇವದೂತನು ಹೊರಗೆ ಹೋದನು. ಪೇತ್ರನು ಅವನನ್ನು
ಹಿಂಬಾಲಿಸಿದನು. ದೇವದೂತನು ನಿಜವಾಗಿಯೂ ಹೀಗೆ
ಮಾಡುತ್ತಿದ್ದಾನೆಂಬುದು ಪೇತ್ರನಿಗೆ ತಿಳಿದಿರಲಿಲ್ಲ. ತಾನು ಕನಸು
ಕಾಣುತ್ತಿರಬಹುದೆಂದು ಅವನು ಯೋಚಿಸಿಕೊಂಡನು. 10
ಪೇತ್ರನು ಮತ್ತು ದೇವದೂತನು ಮೊದಲನೆಯ ಮತ್ತು
ಎರಡನೆಯ ಕಾವಲನ್ನು ದಾಟಿ ಹೋದರು. ಬಳಿಕ ಅವರು
ತಮ್ಮನ್ನು ಪಟ್ಟಣದತ್ತ ನಡೆಸುವ ಕಬ್ಬಿಣದ ಬಾಗಿಲಿಗೆ ಬಂದರು.
ಆ ಬಾಗಿಲು ಅವರಿಗಾಗಿ ತನ್ನಷ್ಟಕ್ಕೆ ತಾನೇ ತೆರೆದುಕೊಂಡಿತು.
ಪೇತ್ರ ಮತ್ತು ಆ ದೇವದೂತನು ಬಾಗಿಲ ಮೂಲಕ ಹೊರಗೆ
ಬಂದು ಒಂದು ಬೀದಿಯನ್ನು ದಾಟಿದರು. ಆಗ ಇದ್ದಕ್ಕಿದ್ದಂತೆ
ಆ ದೇವದೂತನು ಅವನನ್ನು ಬಿಟ್ಟುಹೋದನು.

11ನಡೆದ ಸಂಗತಿಯನ್ನು ಆಗ ಅರಿತುಕೊಂಡ ಪೇತ್ರನು
‘‘ಪ್ರಭುವು ನನ್ನ ಬಳಿಗೆ ತನ್ನ ದೇವದೂತನನ್ನು ನಿಜವಾಗಿಯೂ
ಕಳುಹಿಸಿದನೆಂದು ಈಗ ನನಗೆ ತಿಳಿಯಿತು. ಆತನು ನನ್ನನ್ನು
ಹೆರೋದನ ಕೈಯಿಂದ ಪಾರುಮಾಡಿದನು. ನನಗೆ ಕೇಡು
ಸಂಭವಿಸುತ್ತದೆಯೆಂದು ಯೆಹೂದ್ಯರು ಯೋಚಿಸಿಕೊಂಡಿ
ದ್ದರು. ಆದರೆ ಪ್ರಭುವು ನನ್ನನ್ನು ಆ ಕೇಡಿನಿಂದ ರಕ್ಷಿಸಿದನು’’
ಎಂದುಕೊಂಡನು.

12ಬಳಿಕ ಪೇತ್ರನು ಮರಿಯಳ ಮನೆಗೆ ಹೋದನು.
ಆಕೆಯು ಯೋಹಾನನ ತಾಯಿ. (ಯೋಹಾನನನ್ನು ಮಾರ್ಕ
ನೆಂದು ಕರೆಯುತ್ತಿದ್ದರು.) ಅನೇಕ ಜನರು ಅಲ್ಲಿ ಸೇರಿದ್ದರು.
ಅವರೆಲ್ಲರೂ ಪ್ರಾರ್ಥಿಸುತ್ತಿದ್ದರು. 13ಪೇತ್ರನು ಹೊರ
ಬಾಗಿಲನ್ನು ತಟ್ಟಿದನು. ಯಾರೆಂದು ವಿಚಾರಿಸುವುದಕ್ಕಾಗಿ
ರೋದೆ ಎಂಬ ಸೇವಕಿ ಬಂದಳು. 14ರೋದೆಯು ಪೇತ್ರನ
ಧ್ವನಿಯನ್ನು ಗುರುತಿಸಿದಳು. ಆಕೆಗೆ ತುಂಬಾ ಸಂತೋಷ
ವಾಯಿತು. ಬಾಗಿಲು ತೆರೆಯುವುದನ್ನು ಆಕೆ ಮರೆತು, ನೆರೆದು
ಬಂದಿದ್ದ ಜನರ ಬಳಿಗೆ ಓಡಿಹೋಗಿ‘‘ಪೇತ್ರನು ಬಾಗಿಲ ಬಳಿ
ನಿಂತಿದ್ದಾನೆ!’’ಎಂದು ಹೇಳಿದಳು. 15ಆ ವಿಶ್ವಾಸಿಗಳು ಆಕೆಗೆ,
‘‘ನಿನಗೆ ಹುಚ್ಚು ಹಿಡಿದಿದೆ!’’ ಎಂದರು. ಆದರೆ ಅವಳು ತಾನು
ಹೇಳುತ್ತಿರುವುದು ನಿಜವೆಂದು ಒತ್ತಿಹೇಳಿದಳು. ಆದ್ದರಿಂದ
ಅವರು, ‘‘ಅವನು ಪೇತ್ರನ ದೂತನಿರಬೇಕು’’ ಎಂದು
ಹೇಳಿದರು.

16ಆದರೆ ಪೇತ್ರನು ಬಾಗಿಲನ್ನು ತಟ್ಟುತ್ತಲೇ ಇದ್ದನು. ಆ
ವಿಶ್ವಾಸಿಗಳು ಬಾಗಿಲನ್ನು ತೆರೆದಾಗ ಅವರು ಪೇತ್ರನನ್ನು ಕಂಡು
ವಿಸ್ಮಿತರಾದರು. 17ಪೇತ್ರನು ಅವರಿಗೆ ಸುಮ್ಮನಿರಬೇಕೆಂದು ಸನ್ನೆ
ಮಾಡಿದನು. ಪ್ರಭುವು ತನ್ನನ್ನು ಸೆರೆಮನೆಯಿಂದ ಬಿಡಿಸಿದ
ರೀತಿಯನ್ನು ಅವನು ಅವರಿಗೆ ವಿವರಿಸಿ, ‘‘ಯಾಕೋಬನಿಗೂ
ಮತ್ತು ಸಹೋದರರಿಗೂ ಈ ಸಂಗತಿಯನ್ನು ತಿಳಿಸಿರಿ’’ ಎಂದು
ಹೇಳಿದನು. ಬಳಿಕ ಪೇತ್ರನು ಬೇರೊಂದು ಸ್ಥಳಕ್ಕೆ ಹೋಗಲು
ಅಲ್ಲಿಂದ ಹೊರಟನು.

[18]ಮರುದಿನ, ಪೇತ್ರನು ಏನಾದನೆಂದು ಸೈನಿಕರ ನಡುವೆ ದೊಡ್ಡ ಗೊಂದಲವೇ ಎದ್ದಿತು. [19]ಹೆರೋದನು ಎಲ್ಲೆಲ್ಲಿ ಹುಡುಕಿದರೂ ಪೇತ್ರನನ್ನು ಕಂಡುಹಿಡಿಯಲಾಗಲಿಲ್ಲ. ಆದ್ದರಿಂದ ಹೆರೋದನು ಕಾವಲುಗಾರರನ್ನು ವಿಚಾರಿಸಿ ಅವರಿಗೇ ಮರಣದಂಡನೆ ವಿಧಿಸಿದನು.

### ಹೆರೋದ ಅಗ್ರಿಪ್ಪನ ಮರಣ

[20] ತರುವಾಯ ಹೆರೋದನು ಜುದೇಯದಿಂದ ಹೊರಟು ಸೆಜರೇಯ ಪಟ್ಟಣಕ್ಕೆ ಬಂದು ಅಲ್ಲೇ ಸ್ವಲ್ಪಕಾಲ ನೆಲೆಸಿದ್ದನು. ಟೈರ್ ಮತ್ತು ಸಿದೋನ್ ಪಟ್ಟಣಗಳ ಜನರ ಮೇಲೆ ಹೆರೋದನು ಬಹು ಕೋಪಗೊಂಡಿದ್ದನು. ಆ ಜನರೆಲ್ಲರೂ ಹೆರೋದನನ್ನು ಭೇಟಿಯಾಗಲು ಒಟ್ಟಾಗಿ ಹೋದರು. ಅವರು ಬ್ಲಾಸ್ತನನ್ನು ತಮ್ಮ ಕಡೆಗೆ ಒಲಿಸಿಕೊಂಡರು. ಬ್ಲಾಸ್ತನು ರಾಜನ ವೈಯಕ್ತಿಕ ಸೇವಕನಾಗಿದ್ದನು. ಆ ಜನರು ತಮ್ಮೊಂದಿಗೆ ಶಾಂತಿ ಸಂಧಾನ ಮಾಡಿಕೊಳ್ಳಬೇಕೆಂದು ಹೆರೋದನನ್ನು ಕೇಳಿಕೊಂಡರು. ಯಾಕೆಂದರೆ ಅವರ ನಾಡಿಗೆ ಹೆರೋದನ ನಾಡಿನಿಂದ ಆಹಾರವನ್ನು ತರಿಸಿಕೊಳ್ಳಬೇಕಾಗಿತ್ತು.

[21]ಅವರನ್ನು ಸಂಧಿಸುವುದಕ್ಕಾಗಿ ಹೆರೋದನು ದಿನವೊಂದನ್ನು ಗೊತ್ತುಮಾಡಿದನು. ಅಂದು ಹೆರೋದನು ಸುಂದರವಾದ ರಾಜವಸ್ತ್ರವನ್ನು ಧರಿಸಿಕೊಂಡಿದ್ದನು. ಅವನು ತನ್ನ ಸಿಂಹಾಸನದ ಮೇಲೆ ಕುಳಿತುಕೊಂಡು ಜನರಿಗೆ ಭಾಷಣ ಮಾಡಿದನು. [22]ಆ ಜನರು,''ಈ ಧ್ವನಿಯು ಮನುಷ್ಯನದಲ್ಲ, ದೇವರದೇ!'' ಎಂದು ಕೂಗಿದರು. [23]ಹೆರೋದನು ಈ ಹೊಗಳಿಕೆಯನ್ನು ತಾನೇ ಸ್ವೀಕರಿಸಿಕೊಂಡನು, ದೇವರನ್ನು ಮಹಿಮೆಪಡಿಸಲಿಲ್ಲ. ಆದ್ದರಿಂದ ಆ ಕ್ಷಣವೇ, ಪ್ರಭುವಿನ ದೂತನೊಬ್ಬನು ಅವನಿಗೆ ಕಾಯಿಲೆಯನ್ನು ಬರಮಾಡಿದನು. ಅವನ ದೇಹದ ಒಳಭಾಗವನ್ನು ಹುಳಗಳು ತಿಂದುಹಾಕಿದ್ದರಿಂದ ಅವನು ಸತ್ತುಹೋದನು.

[24]ದೇವರ ಸಂದೇಶವು ಹಬ್ಬುತ್ತಿತ್ತು ಮತ್ತು ಹೆಚ್ಚುಹೆಚ್ಚು ಜನರ ಮೇಲೆ ಪ್ರಭಾವ ಬೀರುತ್ತಿತ್ತು. ಇದರಿಂದ ವಿಶ್ವಾಸಿಗಳ ಸಮುದಾಯವು ದೊಡ್ಡದಾಗತೊಡಗಿತು.

[25]ಬಾರ್ನಬ ಮತ್ತು ಸೌಲರು ಜೆರುಸಲೇಮಿನಲ್ಲಿ ತಮ್ಮ ಕಾರ್ಯವನ್ನು ಮುಗಿಸಿದ ಮೇಲೆ ಅಂತಿಯೋಕ್ಯಕ್ಕೆ ಹಿಂತಿರುಗಿದರು. ಮಾರ್ಕನೆಂಬ ಯೋಹಾನನು ಅವರೊಂದಿಗಿದ್ದನು.

### ಬಾರ್ನಬ ಮತ್ತು ಸೌಲರಿಗೆ ವಹಿಸಲಾದ ವಿಶೇಷಕಾರ್ಯ

13 ಅಂತಿಯೋಕ್ಯದ ಸಭೆಯಲ್ಲಿ ಕೆಲವು ಪ್ರವಾದಿಗಳು ಮತ್ತು ಉಪದೇಶಕರಿದ್ದರು. ಅವರು ಯಾರಂದರೆ: ಬಾರ್ನಬ, ಸಿಮೆಯೋನ್(ಇವನನ್ನು ನೀಗರ್ ಎಂತಲೂ ಕರೆಯುತ್ತಿದ್ದರು.) ಲೂಸಿಯಸ್(ಸಿರೇನ್ ಪಟ್ಟಣದವನು) ಮೆನಹೇನ (ಹೆರೋದ ರಾಜನೊಂದಿಗೆ ಬೆಳೆದವನು.) ಮತ್ತು ಸೌಲ. [2]ಇವರೆಲ್ಲರು ಪ್ರಭುವಿನ ಸೇವೆ ಮಾಡುತ್ತಿದ್ದರು ಮತ್ತು ಉಪವಾಸ ಮಾಡುತ್ತಿದ್ದರು. ಪವಿತ್ರಾತ್ಮನು ಅವರಿಗೆ, ''ನಾನು ವಿಶೇಷವಾದ ಕಾರ್ಯಕ್ಕಾಗಿ ಬಾರ್ನಬ ಮತ್ತು ಸೌಲರನ್ನು ಆರಿಸಿಕೊಂಡಿದ್ದೇನೆ. ಆ ಕಾರ್ಯಕ್ಕಾಗಿ ಅವರನ್ನು ಪ್ರತ್ಯೇಕಿಸಿರಿ'' ಎಂದು ಹೇಳಿದನು.

[3]ಆದ್ದರಿಂದ ಸಭೆಯವರು ಉಪವಾಸವಿದ್ದು ಪ್ರಾರ್ಥನೆ ಮಾಡಿದರು. ಅವರು ಬಾರ್ನಬ ಮತ್ತು ಸೌಲರ ಮೇಲೆ ಹಸ್ತಾರ್ಪಣೆ ಮಾಡಿ ಅವರನ್ನು ಕಳುಹಿಸಿಕೊಟ್ಟರು.

### ಸೈಪ್ರಸ್‌ನಲ್ಲಿ ಬಾರ್ನಬ ಮತ್ತು ಸೌಲರು

[4]ಬಾರ್ನಬ ಮತ್ತು ಸೌಲರನ್ನು ಪವಿತ್ರಾತ್ಮನೇ ಕಳುಹಿಸಿಕೊಟ್ಟನು. ಅವರು ಸೆಲೂಸಿಯಾ ಪಟ್ಟಣಕ್ಕೆ ಹೋದರು. ಬಳಿಕ ಅವರು ಸೆಲೂಸಿಯಾದಿಂದ ಸೈಪ್ರಸ್ ದ್ವೀಪಕ್ಕೆ ಹಡಗಿನಲ್ಲಿ ಪ್ರಯಾಣ ಮಾಡಿದರು. [5]ಬಾರ್ನಬ ಮತ್ತು ಸೌಲರು ಸಲಾಮಿಸ್ ಪಟ್ಟಣಕ್ಕೆ ಬಂದಾಗ ಯೆಹೂದ್ಯರ ಸಭಾಮಂದಿರದಲ್ಲಿ ದೇವರ ಸಂದೇಶವನ್ನು ಸಾರಿದರು. (ಮಾರ್ಕನೆನಿಸಿಕೊಳ್ಳುವ ಯೋಹಾನನು ಸಹಾಯ ಮಾಡುವುದಕ್ಕಾಗಿ ಅವರೊಂದಿಗಿದ್ದನು.)

[6]ಅವರು ಆ ದ್ವೀಪದಲ್ಲೆಲ್ಲಾ ಪ್ರಯಾಣ ಮಾಡುತ್ತಾ ಪಾಫೊಸ್ಎಂಬ ಊರಿಗೆ ಹೋದರು. ಮಂತ್ರ ತಂತ್ರಗಳನ್ನು ಮಾಡುತ್ತಿದ್ದ ಒಬ್ಬ ಯೆಹೂದ್ಯನನ್ನು ಅವರು ಪಾಫೊಸಿನಲ್ಲಿ ಕಂಡರು. ಅವನ ಹೆಸರು 'ಬಾರ್‌ಯೇಸು.' ಅವನೊಬ್ಬ ಸುಳ್ಳುಪ್ರವಾದಿ. [7]ಸೆರ್ಗ್ಯಪೌಲನೆಂಬ ರಾಜ್ಯಪಾಲನ ಹತ್ತಿರದಲ್ಲೇ ಅವನು ಯಾವಾಗಲೂ ಇರುತ್ತಿದ್ದನು. ಸೆರ್ಗ್ಯಪೌಲನು ಜ್ಞಾನವಂತನಾಗಿದ್ದನು. ಅವನು ದೇವರ ವಾಕ್ಯವನ್ನು ಕೇಳಲು ಬಾರ್ನಬ ಮತ್ತು ಸೌಲರನ್ನು ಆಮಂತ್ರಿಸಿದನು. [8]ಆದರೆ ಮಂತ್ರವಾದಿಯಾದ ಎಲಿಮನು ಬಾರ್ನಬ ಮತ್ತು ಸೌಲರಿಗೆ ವಿರೋಧವಾಗಿದ್ದನು. (ಬಾರ್ ಯೇಸುವನ್ನು ಗ್ರೀಕ್ ಭಾಷೆಯಲ್ಲಿ ಎಲಿಮ ಎಂದು ಕರೆಯುತ್ತಿದ್ದರು.) ರಾಜ್ಯಪಾಲನು ಯೇಸುವಿನಲ್ಲಿ ನಂಬಿಕೆ ಇಡದ ಹಾಗೆ ಮಾಡಲು ಎಲಿಮನು ಪ್ರಯತ್ನಿಸಿದನು. [9]ಆದರೆ ಪೌಲನು ಪವಿತ್ರಾತ್ಮಭರಿತನಾದನು. (ಸೌಲನ ಮತ್ತೊಂದು ಹೆಸರು ಪೌಲ.) ಪೌಲನು ಎಲಿಮನನ್ನು ದಿಟ್ಟಿಸಿ ನೋಡಿ, [10]ಅವನಿಗೆ, ''ನೀನು ಸೈತಾನನ ಮಗ! ಪ್ರತಿಯೊಂದು ಒಳ್ಳೆಯದಕ್ಕೂ ನೀನು ಶತ್ರು! ನೀನು ದುಷ್ಟತಂತ್ರಗಳಿಂದಲೂ ಸುಳ್ಳುಗಳಿಂದಲೂ ತುಂಬಿದವನಾಗಿರುವೆ. ಪ್ರಭುವಿನ ಸತ್ಯಗಳನ್ನು ಸುಳ್ಳುಗಳನ್ನಾಗಿ ಪರಿವರ್ತಿಸಲು ನೀನು ಯಾವಾಗಲೂ ಪ್ರಯತ್ನಿಸುತ್ತಿರುವೆ! [11]ಇಗೋ, ಪ್ರಭುವು ಕೈ ಎತ್ತಿದ್ದಾನೆ. ನೀನು ಕುರುಡನಾಗಿ ಸ್ವಲ್ಪಕಾಲದವರೆಗೆ ಏನನ್ನೂ ನೋಡಲಾರೆ; ಸೂರ್ಯನ ಬೆಳಕನ್ನು ಸಹ ಕಾಣಲಾರೆ'' ಎಂದನು.

ಆಗ ಎಲಿಮನಿಗೆ ಎಲ್ಲವೂ ಕತ್ತಲಾಯಿತು. ತನ್ನನ್ನು ಯಾರಾದರೂ ಕೈಹಿಡಿದು ನಡೆಸಲೆಂದು ಅವನು ತಡವರಿಸುತ್ತಾ ಸುತ್ತಮುತ್ತ ನಡೆದನು. [12]ಇದನ್ನು ಕಂಡ ರಾಜ್ಯಪಾಲನು ಪ್ರಭುವನ್ನು ನಂಬಿಕೊಂಡನು. ಪ್ರಭುವಿನ ವಿಷಯವಾದ ಉಪದೇಶವನ್ನು ಕೇಳಿ ವಿಸ್ಮಿತನಾದನು.

### ಪೌಲ ಬಾರ್ನಬರು ಸೈಪ್ರಸ್‌ನಿಂದ ತೆರಳುವರು

[13]ಪೌಲ ಮತ್ತು ಅವನ ಸಂಗಡಿಗರು ಪಾಫೊಸಿನಿಂದ ನೌಕಾಯಾನ ಮಾಡಿದರು. ಪಾಂಫಿಲಿಯ ಪ್ರಾಂತ್ಯದಲ್ಲಿದ್ದ ಪೆರ್ಗ ಎಂಬ ಪಟ್ಟಣಕ್ಕೆ ಅವರು ಬಂದರು. ಆದರೆ ಮಾರ್ಕನೆನಿಸಿಕೊಳ್ಳುವ ಯೋಹಾನನು ಅವರನ್ನು ಬಿಟ್ಟು ಜೆರುಸಲೇಮಿಗೆ ಹಿಂತಿರುಗಿದನು. [14]ಅವರು ತಮ್ಮ ಪ್ರಯಾಣವನ್ನು ಪೆರ್ಗದಿಂದ

ಮುಂದುವರಿಸಿ, ಪಿಸಿದಿಯ ಸೀಮೆಗೆ ಸೇರಿದ ಅಂತಿಯೋಕ್ಯಕ್ಕೆ
ಹೋದರು. ಅವರು ಅಂತಿಯೋಕ್ಯದಲ್ಲಿ ಸಬ್ಬತ್‌ದಿನದಂದು
ಯೆಹೂದ್ಯರ ಸಭಾಮಂದಿರದೊಳಗೆ ಹೋಗಿ ಕುಳಿತು
ಕೊಂಡರು. 15ಮೋಶೆಯ ಧರ್ಮಶಾಸ್ತ್ರವನ್ನು ಮತ್ತು ಪ್ರವಾದಿ
ಗಳ ಗ್ರಂಥಗಳನ್ನು ಓದಲಾಯಿತು. ಬಳಿಕ ಸಭಾಮಂದಿರದ
ನಾಯಕರು ಪೌಲ ಬಾರ್ನಬರಿಗೆ, ‘‘ಸಹೋದರರೇ, ಇಲ್ಲಿರುವ
ಜನರಿಗೆ ಸಹಾಯವಾಗುವಂತೆ ಏನನ್ನಾದರೂ ನೀವು ಹೇಳ
ಬೇಕೆಂದಿದ್ದರೆ, ದಯವಿಟ್ಟು ಹೇಳಿ!’’ ಎಂಬ ಸಂದೇಶವನ್ನು
ಕಳುಹಿಸಿದರು.

16ಪೌಲನು ಎದ್ದುನಿಂತುಕೊಂಡು ತನ್ನ ಮಾತುಗಳನ್ನು
ಕೇಳಬೇಕೆಂದು ಜನರಿಗೆ ಕೈಸನ್ನೆ ಮಾಡಿ ಇಂತೆಂದನು: ‘‘ನನ್ನ
ಯೆಹೂದ್ಯಸಹೋದರರೇ, ನಿಜ ದೇವರನ್ನು ಆರಾಧಿಸುವ ಇತರ
ಜನರೇ, ದಯವಿಟ್ಟು ನನಗೆ ಕಿವಿಗೊಡಿರಿ! 17ಇಸ್ರೇಲರ
ದೇವರು ನಮ್ಮ ಪಿತೃಗಳನ್ನು ಆರಿಸಿಕೊಂಡನು. ಈಜಿಪ್ಟಿನಲ್ಲಿ
ಪ್ರವಾಸಿಗರಾಗಿ ವಾಸಿಸುತ್ತಿದ್ದ ತನ್ನ ಜನರಿಗೆ ದೇವರು ಸಹಾಯ
ಮಾಡಿ ಅಭಿವೃದ್ಧಿಪಡಿಸಿದನು. ದೇವರು ತನ್ನ ಮಹಾ ಶಕ್ತಿಯಿಂದ
ಅವರನ್ನು ಆ ದೇಶದೊಳಗಿಂದ ಬರಮಾಡಿದನು. 18ಮರಳು
ಗಾಡಿನಲ್ಲಿ ನಲವತ್ತು ವರ್ಷಗಳ ಕಾಲ ಅವರನ್ನು ಸಹಿಸಿ
ಕೊಂಡನು. 19ಕಾನಾನ್ ನಾಡಿನ ಏಳು ಜನಾಂಗಗಳನ್ನು ನಾಶ
ಮಾಡಿ ತನ್ನ ಜನರಿಗೆ ಆ ನಾಡನ್ನು ಸ್ವಾಸ್ತ್ಯವಾಗಿ ಕೊಟ್ಟನು.
20ಇವೆಲ್ಲಾ ಸುಮಾರು ನಾನೂರ ಐವತ್ತು ವರ್ಷಗಳ ಅವಧಿ
ಯಲ್ಲಿ ನಡೆದವು.

‘‘ಇದಾದ ಮೇಲೆ ಪ್ರವಾದಿಯಾದ ಸಮುವೇಲನ ಕಾಲದ
ವರೆಗೆ ದೇವರು ನಮ್ಮ ಜನರಿಗೆ ನ್ಯಾಯಸ್ಥಾಪಕರನ್ನು ಕೊಟ್ಟನು.
21ಬಳಿಕ ಜನರು ತಮಗೆ ರಾಜನು ಬೇಕೆಂದು ಕೇಳಿಕೊಂಡರು.
ದೇವರು ಅವರಿಗೆ ಕೀಷನ ಮಗನಾದ ಸೌಲನನ್ನು ಕೊಟ್ಟನು.
ಸೌಲನು ಬೆನ್ಯಾಮೀನ್ ಕುಲದವನು. ಅವನು ನಲವತ್ತು ವರ್ಷ
ಗಳ ಕಾಲ ರಾಜನಾಗಿದ್ದನು. 22ದೇವರು ಸೌಲನನ್ನು ತೆಗೆದು
ಹಾಕಿದ ಮೇಲೆ ದಾವೀದನನ್ನು ಅವರ ರಾಜನನ್ನಾಗಿ
ಮಾಡಿದನು. ‘ಇಷಯನ ಮಗನಾದ ದಾವೀದನು ನನಗೆ ಮೆಚ್ಚಿಗೆ
ಯಾದವನು. ಅವನು ನನ್ನ ಅಪೇಕ್ಷೆಗೆ ತಕ್ಕಂತೆ ಕಾರ್ಯಗಳನ್ನು
ಮಾಡುತ್ತಾನೆ.’ ಎಂದು ದೇವರು ದಾವೀದನ ಬಗ್ಗೆ ಹೇಳಿದ್ದಾನೆ.
23ದೇವರು ತನ್ನ ವಾಗ್ದಾನಕ್ಕನುಸಾರವಾಗಿ ದಾವೀದನ ಸಂತಾನ
ದವರಲ್ಲಿ ಒಬ್ಬನನ್ನು ಇಸ್ರೇಲರ ರಕ್ಷಕನನ್ನಾಗಿ ಕಳುಹಿಸಿ
ಕೊಟ್ಟಿದ್ದಾನೆ. ಆತನೇ ಯೇಸು. 24ಯೇಸು ಬರುವುದಕ್ಕಿಂತ
ಮೊದಲು (ಸ್ನಾನಿಕ) ಯೋಹಾನನು ಯೆಹೂದ್ಯ ಜನರಿಗೆಲ್ಲಾ
ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿ
ಕೊಂಡು ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ ಎಂದು ಬೋಧಿಸಿ
ದನು. 25‘ನಾನು ಯಾರೆಂದು ನೀವು ಯೋಚಿಸುತ್ತೀರಿ? ನಾನು
ಕ್ರಿಸ್ತನಲ್ಲ. ಆತನು ನನ್ನ ತರುವಾಯ ಬರುತ್ತಾನೆ. ಆತನ
ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು ಯೋಗ್ಯನಲ್ಲ’ ಎಂದು
ಯೋಹಾನನು ತನ್ನ ಕಾರ್ಯವನ್ನು ಮಾಡಿ ಪೂರೈಸುತ್ತಿದ್ದಾಗ
ಹೇಳಿಕೊಂಡಿದ್ದಾನೆ.

26‘‘ನನ್ನ ಸಹೋದರರೇ, ಅಬ್ರಹಾಮನ ಕುಟುಂಬದ
ಪುತ್ರರೇ, ನಿಜದೇವರನ್ನು ಆರಾಧಿಸುತ್ತಿರುವ ಯೆಹೂದ್ಯರಲ್ಲ
ದವರೇ, ಕೇಳಿರಿ! ಈ ರಕ್ಷಣೆಯ ಸಂದೇಶವನ್ನು ಕಳುಹಿ
ಸಿರುವುದು ನಮಗಾಗಿಯೇ. 27ಜೆರುಸಲೇಮಿನಲ್ಲಿ ವಾಸವಾಗಿದ್ದ
ಯೆಹೂದ್ಯರು ಮತ್ತು ಯೆಹೂದ್ಯ ನಾಯಕರು ಯೇಸುವೇ
ರಕ್ಷಕನೆಂಬುದನ್ನು ಅರ್ಥಮಾಡಿಕೊಳ್ಳಲಿಲ್ಲ. ಪ್ರವಾದಿಗಳು
ಯೇಸುವಿನ ಬಗ್ಗೆ ಬರೆದಿದ್ದ ಮಾತುಗಳನ್ನು ಪ್ರತಿ ಸಬ್ಬತ್
ದಿನದಂದು ಓದಲಾಗುತ್ತಿತ್ತು. ಆದರೆ ಅವರು ಅರ್ಥಮಾಡಿ
ಕೊಳ್ಳಲಿಲ್ಲ. ಆ ಯೆಹೂದ್ಯರು ಯೇಸುವನ್ನು ಅಪರಾಧಿಯೆಂದು
ತೀರ್ಪು ಮಾಡಿದರು. ಹೀಗೆ ಮಾಡುವುದರ ಮೂಲಕವಾಗಿ
ಅವರು ಪ್ರವಾದಿಗಳ ನುಡಿಗಳನ್ನು ನೆರವೇರಿಸಿದರು! 28ಯೇಸು
ಸಾಯಲೇಬೇಕೆಂಬುದಕ್ಕೆ ಸರಿಯಾದ ಕಾರಣವನ್ನು ಅವರು
ಕಂಡುಹಿಡಿಯಲಾಗದಿದ್ದರೂ ಯೇಸುವನ್ನು ಕೊಲ್ಲಿಸ
ಬೇಕೆಂದು ಪಿಲಾತನನ್ನು ಕೇಳಿಕೊಂಡರು. 29ಪವಿತ್ರ ಗ್ರಂಥದಲ್ಲಿ
ಬರೆದಿರುವಂತೆ ಯೇಸುವಿಗೆ ಸಂಭವಿಸಬೇಕಾಗಿದ್ದ ಕೆಟ್ಟವು
ಗಳನ್ನೆಲ್ಲ ಯೆಹೂದ್ಯರು ಆತನಿಗೆ ಮಾಡಿದರು. ಬಳಿಕ ಅವರು
ಯೇಸುವನ್ನು ಶಿಲುಬೆಯಿಂದ ಕೆಳಗಿಳಿಸಿ ಸಮಾಧಿಯಲ್ಲಿಟ್ಟರು.
30ಆದರೆ ದೇವರು ಆತನನ್ನು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದನು! 31ಇದಾದ ಮೇಲೆ ಗಲಿಲಾಯದಿಂದ ಯೇಸುವಿ
ನೊಂದಿಗೆ ಜೆರುಸಲೇಮಿಗೆ ಬಂದಿದ್ದವರು, ಅನೇಕ ದಿನಗಳ
ವರೆಗೆ ಆತನನ್ನು ನೋಡಿದರು. ಈಗ ಅವರೇ ಜನರಿಗೆ
ಸಾಕ್ಷಿಗಳಾಗಿದ್ದಾರೆ. 32ದೇವರು ನಮ್ಮ ಪಿತೃಗಳಿಗೆ ಮಾಡಿದ
ವಾಗ್ದಾನದ ವಿಷಯವಾದ ಸುವಾರ್ತೆಯನ್ನು ನಾವು ನಿಮಗೆ
ಹೇಳುತ್ತೇವೆ. 33ನಾವು ಅವರ ಸಂತತಿಯವರಾಗಿದ್ದೇವೆ. ದೇವರು
ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸುವುದರ
ಮೂಲಕ ಆ ವಾಗ್ದಾನವನ್ನು ನಮಗಾಗಿ ನೆರವೇರಿಸಿದ್ದಾನೆ. ಇದರ
ಬಗ್ಗೆ ಎರಡನೆ ಕೀರ್ತನೆಯಲ್ಲಿ ಹೀಗೆಂದು ಬರೆದಿದೆ:

> ‘ನೀನೇ ನನ್ನ ಮಗನು. ಇಂದೇ ನಾನು ನಿನ್ನನ್ನು
> ಪಡೆದೆನು.’ *ಕೀರ್ತನೆ 2:7*

34ದೇವರು ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದ್ದರಿಂದ ಆತನು ಇನ್ನೆಂದಿಗೂ ಸಮಾಧಿಗೆ ಸೇರಿ ಕೊಳೆಯು
ವುದಿಲ್ಲ ಎಂಬ ವಿಷಯದಲ್ಲಿ ದೇವರು ಇಂತೆಂದಿದ್ದಾನೆ:

> ‘ನಾನು ದಾವೀದನಿಗೆ ಮಾಡಿದ ಸತ್ಯವೂ ಪವಿತ್ರವೂ
> ಆದ ವಾಗ್ದಾನಗಳನ್ನು ನಿನಗೆ ಕೊಡುತ್ತೇನೆ.’
> *ಯೆಶಾಯ 55 :3*

35ಆದರೆ ಮತ್ತೊಂದು ಸ್ಥಳದಲ್ಲಿ ದೇವರು ಇಂತೆನ್ನುತ್ತಾನೆ:

> ‘ನೀನು ನಿನ್ನ ಪರಿಶುದ್ಧನ ದೇಹವನ್ನು ಸಮಾಧಿ
> ಯಲ್ಲಿ ಕೊಳೆಯಲು ಬಿಡುವುದಿಲ್ಲ.’
> *ಕೀರ್ತನೆ 16:10*

36ದಾವೀದನು ತನ್ನ ಜೀವಮಾನಕಾಲದಲ್ಲಿ ದೇವರ ಚಿತ್ತಕ್ಕನು
ಸಾರವಾಗಿ ಬಾಳಿದನು. ಬಳಿಕ ಅವನು ಸತ್ತುಹೋದನು.
ದಾವೀದನನ್ನು ಅವನ ಪಿತೃಗಳೊಂದಿಗೆ ಸಮಾಧಿಮಾಡ
ಲಾಯಿತು. ಅವನ ದೇಹ ಸಮಾಧಿಯಲ್ಲಿ ಕೊಳೆತುಹೋಯಿತು!
37ಆದರೆ ದೇವರಿಂದ ಜೀವಂತವಾಗಿ ಎಬ್ಬಿಸಲ್ಪಟ್ಟ ಯೇಸುವಿನ
ದೇಹ ಸಮಾಧಿಯಲ್ಲಿ ಕೊಳೆಯಲ್ಪಡಲಿಲ್ಲ.

38-39ಸಹೋದರರೇ, ಇದು ನಿಮಗೆ ತಿಳಿದಿರಲಿ: ಆತನ ಮೂಲಕವಾಗಿ ನಿಮ್ಮ ಪಾಪಗಳಿಗೆ ಕ್ಷಮೆ ದೊರೆಯುತ್ತದೆ. ಮೋಶೆಯ ಧರ್ಮಶಾಸ್ತ್ರಕ್ಕೆ ನಿಮ್ಮನ್ನು ನಿಮ್ಮ ಪಾಪಗಳಿಂದ ಬಿಡಿಸಲಾಗಲಿಲ್ಲ. ಆದರೆ ಯೇಸುವಿನಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬನು ಆತನ ಮೂಲಕವಾಗಿ ತನ್ನ ಎಲ್ಲಾ ಪಾಪಗಳಿಂದ ಬಿಡುಗಡೆಯಾಗುವನು. 40ಆದುದರಿಂದ ಪ್ರವಾದಿಗಳು ತಿಳಿಸಿರುವ ಈ ಕೆಲವು ಸಂಗತಿಗಳು ನಿಮ್ಮಲ್ಲಿ ನಿಜವಾಗದಂತೆ ಎಚ್ಚರಿಕೆಯಾಗಿರಿ:

41 ‘ಅಪಹಾಸ್ಯ ಮಾಡುವವರೇ, ಆಶ್ಚರ್ಯಪಡುತ್ತಾ
ನಾಶವಾಗಿ ಹೋಗಿರಿ. ನೀವು ನಂಬಲೊಲ್ಲದ
ಒಂದು ಕಾರ್ಯವನ್ನು ನಾನು ಮಾಡುವೆನು.
ಬೇರೊಬ್ಬನು ನಿಮಗೆ ಅದನ್ನು ವಿವರಿಸಿದರೂ
ನೀವು ನಂಬುವುದಿಲ್ಲ!’’’

*ಹಬಕ್ಕೂಕ 1:5*

42ಪೌಲ ಮತ್ತು ಬಾರ್ನಬ ಸಭಾಮಂದಿರದಿಂದ ಹೋಗುವಾಗ, ಈ ಸಂಗತಿಗಳ ಬಗ್ಗೆ ಇನ್ನೂ ಹೆಚ್ಚಿಗೆ ತಿಳಿಸುವುದಕ್ಕಾಗಿ ಮುಂದಿನ ಸಬ್ಬತ್ ದಿನದಂದು ಮತ್ತೆ ಬರಬೇಕೆಂದು ಜನರು ಅವರನ್ನು ಕೇಳಿಕೊಂಡರು. 43ಸಭೆಯು ಮುಗಿದ ಮೇಲೆ ಅನೇಕ ಯೆಹೂದ್ಯರು ಪೌಲ ಬಾರ್ನಬರನ್ನು ಆ ಸ್ಥಳದಿಂದ ಹಿಂಬಾಲಿಸಿದರು. ಯೆಹೂದ್ಯರ ಧರ್ಮಕ್ಕೆ ಸೇರಿಕೊಂಡಿದ್ದ ಅನೇಕ ಅನ್ಯಮತೀಯರೂ ಆ ಯೆಹೂದ್ಯರೊಂದಿಗಿದ್ದರು. ಮತಾಂತರಗೊಂಡಿದ್ದ ಇವರು ಸಹ ನಿಜದೇವರನ್ನು ಆರಾಧಿಸುತ್ತಿದ್ದರು. ಪೌಲ ಬಾರ್ನಬರು ಅವರೊಂದಿಗೆ ಮಾತಾಡಿ, ದೇವರ ಕೃಪೆಯಲ್ಲೇ ಭರವಸವಿಟ್ಟು ಮುಂದುವರಿಯಬೇಕೆಂದು ಪ್ರೋತ್ಸಾಹಪಡಿಸಿದರು. 44ಮುಂದಿನ ಸಬ್ಬತ್ ದಿನದಂದು, ಪ್ರಭುವಿನ ವಾಕ್ಯವನ್ನು ಕೇಳುವುದಕ್ಕಾಗಿ ಬಹುಮಟ್ಟಿಗೆ ನಗರದ ಜನರೆಲ್ಲರೂ ನೆರೆದುಬಂದರು. 45ಇದನ್ನು ಕಂಡ ಯೆಹೂದ್ಯರಿಗೆ ಬಹಳ ಅಸೂಯೆಯಾಯಿತು. ಅವರು ಪೌಲನ ಮಾತುಗಳನ್ನು ಕಟುವಾಗಿ ದೂಷಿಸಿ ಅವುಗಳಿಗೆ ವಿರೋಧವಾಗಿ ವಾದಿಸಿದರು. 46ಆದರೆ ಪೌಲ ಬಾರ್ನಬರು ಬಹು ಧೈರ್ಯದಿಂದ ಮಾತಾಡಿ; ‘‘ನಾವು ದೇವರ ಸಂದೇಶವನ್ನು ಯೆಹೂದ್ಯರಾದ ನಿಮಗೆ ಮೊದಲು ಹೇಳಬೇಕು. ಆದರೆ ನೀವು ನಿಮ್ಮನ್ನು ನಿತ್ಯಜೀವಕ್ಕೆ ಅಪಾತ್ರರೆಂದು ಎಣಿಸಿಕೊಂಡು ತಿರಸ್ಕರಿಸುತ್ತಿದ್ದೀರಿ. ಆದ್ದರಿಂದ ನಾವು ಅನ್ಯಧರ್ಮದವರ ಬಳಿಗೆ ಹೋಗುತ್ತೇವೆ! 47ಏಕೆಂದರೆ ಪ್ರಭುವು ನಮಗೆ ಕೊಟ್ಟ ಆಜ್ಞೆ ಇಂತಿದೆ:

‘ಲೋಕದ ಕಟ್ಟಕಡೆಯಲ್ಲಿರುವ ಜನರೆಲ್ಲರಿಗೂ
ನೀನು ರಕ್ಷಕನಾಗಿರಬೇಕೆಂದು ನಾನು ನಿನ್ನನ್ನು
ಇತರ ಜನಾಂಗಗಳಿಗೆ ಬೆಳಕನ್ನಾಗಿ ಮಾಡಿದ್ದೇನೆ.’’

*ಯೆಶಾಯ 49:6*

48ಪೌಲನ ಈ ಮಾತುಗಳನ್ನು ಕೇಳಿದ ಯೆಹೂದ್ಯರಲ್ಲದ ಜನರು ಬಹು ಸಂತೋಷಪಟ್ಟು ಪ್ರಭುವಿನ ಸಂದೇಶಕ್ಕಾಗಿ ಸ್ತುತಿಸಿದರು. ನಿತ್ಯಜೀವವನ್ನು ಹೊಂದಿಕೊಳ್ಳಲು ಆಯ್ಕೆಯಾಗಿದ್ದವರೆಲ್ಲರೂ ನಂಬಿಕೊಂಡರು.

49ಪ್ರಭುವಿನ ಸಂದೇಶವನ್ನು ಆ ನಾಡಿನಲ್ಲೆಲ್ಲಾ ಸಾರಲಾಯಿತು. 50ಆದರೆ ಯೆಹೂದ್ಯರು ಕೆಲವು ಧಾರ್ಮಿಕ ಸ್ತ್ರೀಯರನ್ನೂ ನಗರದ ನಾಯಕರನ್ನೂ ಪ್ರಚೋಧಿಸಿ, ಪೌಲ ಬಾರ್ನಬರ ಮೇಲೆ ಅವರು ಕೋಪಗೊಳ್ಳುವಂತೆಯೂ ಅವರಿಗೆ ವಿರೋಧಿಗಳಾಗುವಂತೆಯೂ ಮಾಡಿ ಪೌಲ ಬಾರ್ನಬರನ್ನು ಪಟ್ಟಣದಿಂದ ಹೊರಗಟ್ಟಿಸಿದರು. 51ಆದ್ದರಿಂದ ಪೌಲ ಬಾರ್ನಬರು ಅವರ ವಿರೋಧವಾಗಿ ತಮ್ಮ ಕಾಲಿನ ಧೂಳನ್ನು ಝಾಡಿಸಿ,* ಇಕೋನಿಯಾ ಪಟ್ಟಣಕ್ಕೆ ಹೋದರು. 52ಆದರೆ ಯೇಸುವಿನ ಶಿಷ್ಯರು ಸಂತೋಷವಾಗಿದ್ದರು ಮತ್ತು ಪವಿತ್ರಾತ್ಮಭರಿತರಾಗಿದ್ದರು.

### ಇಕೋನಿಯಾದಲ್ಲಿ ಪೌಲ ಮತ್ತು ಬಾರ್ನಬ

14 ಪೌಲ ಬಾರ್ನಬರು ಇಕೋನಿಯಾ ಪಟ್ಟಣಕ್ಕೆ ಹೋದರು. (ಪ್ರತಿಯೊಂದು ಪಟ್ಟಣದಲ್ಲಿಯೂ ಅವರು ಮಾಡುತ್ತಿದ್ದಂತೆ) ಇಲ್ಲಿಯೂ ಯೆಹೂದ್ಯರ ಸಭಾಮಂದಿರದೊಳಗೆ ಹೋಗಿ ಜನರಿಗೆ ಬೋಧಿಸಿದರು. ಪೌಲ ಬಾರ್ನಬರ ಅಮೋಘ ಬೋಧನೆಯನ್ನು ಕೇಳಿ ಅನೇಕ ಯೆಹೂದ್ಯರು ಮತ್ತು ಗ್ರೀಕರು ನಂಬಿಕೊಂಡರು. 2ಆದರೆ ಯೆಹೂದ್ಯರಲ್ಲಿ ನಂಬದೆ ಹೋದ ಕೆಲವರು ಯೆಹೂದ್ಯರಲ್ಲದವರನ್ನು ಪ್ರಚೋಧಿಸಿ ಸಹೋದರರ ವಿರುದ್ಧ ಜನರನ್ನು ಎಬ್ಬಿಸಿದರು. 3ಆದರೆ ಪೌಲ ಬಾರ್ನಬರು ಇಕೋನಿಯಾದಲ್ಲಿ ಬಹುಕಾಲವಿದ್ದು ಪ್ರಭುವಿನ ಕುರಿತು ಧೈರ್ಯದಿಂದ ಮಾತಾಡಿದರು. ಪ್ರಭುವು ಅವರ ಮೂಲಕ ಸೂಚಕಕಾರ್ಯಗಳನ್ನು ಮತ್ತು ಅದ್ಭುತಕಾರ್ಯಗಳನ್ನು ಮಾಡಿ ತನ್ನ ಕೃಪಾಸಂದೇಶವನ್ನು ನಿರೂಪಿಸಿದನು. 4ಆದರೆ ಪಟ್ಟಣದ ಜನರಲ್ಲಿ ಕೆಲವರು ಯೆಹೂದ್ಯರ ಮಾತನ್ನೂ ಇನ್ನು ಕೆಲವರು ಪೌಲ ಬಾರ್ನಬರ ಮಾತನ್ನೂ ನಂಬಿಕೊಂಡದ್ದರಿಂದ ಅವರಲ್ಲಿಯೇ ಎರಡು ಪಂಗಡವಾಯಿತು.

5ಯೆಹೂದ್ಯರಲ್ಲದವರಲ್ಲಿ ಮತ್ತು ಯೆಹೂದ್ಯರಲ್ಲಿ ಕೆಲವರು ತಮ್ಮ ನಾಯಕರೊಡನೆ ಸೇರಿಕೊಂಡು ಪೌಲ ಬಾರ್ನಬರನ್ನು ಕಲ್ಲೆಸೆದು ಕೊಲ್ಲಬೇಕೆಂದಿದ್ದರು. 6ಇದನ್ನು ಅರಿತುಕೊಂಡ ಪೌಲ ಬಾರ್ನಬರು ಆ ಪಟ್ಟಣವನ್ನು ಬಿಟ್ಟು ಲುಕವೋನಿಯಾದ ಪಟ್ಟಣಗಳಾದ ಲುಸ್ತ್ರ ಮತ್ತು ದರ್ಬೆಗಳಿಗೂ ಹಾಗೂ ಆ ಪಟ್ಟಣಗಳ ಸುತ್ತಮುತ್ತಲಿದ್ದ ಪ್ರದೇಶಗಳಿಗೂ ಹೋದರು. 7ಅವರು ಅಲ್ಲಿಯೂ ಸುವಾರ್ತೆ ತಿಳಿಸಿದರು.

### ಲುಸ್ತ್ರ ಮತ್ತು ದರ್ಬೆಗಳಲ್ಲಿ ಪೌಲನು

8ಲುಸ್ತ್ರದಲ್ಲಿ ಒಬ್ಬ ಮನುಷ್ಯನಿದ್ದನು. ಅವನ ಕಾಲುಗಳಲ್ಲಿ ಬಲವಿರಲಿಲ್ಲ. ಹುಟ್ಟುಕುಂಟನಾಗಿದ್ದ ಅವನು ಎಂದೂ ನಡೆದಿರಲಿಲ್ಲ. 9ಈ ಮನುಷ್ಯನು ತಾನು ಕುಳಿತಲ್ಲೇ ಪೌಲನ ಮಾತನ್ನು ಆಲಿಸುತ್ತಿದ್ದನು. ಪೌಲನು ಅವನನ್ನು ದೃಷ್ಟಿಸಿ ನೋಡಿದನು. ದೇವರು ಗುಣಪಡಿಸಬಲ್ಲನೆಂಬ ನಂಬಿಕೆ ಅವನಲ್ಲಿರುವುದನ್ನು ಪೌಲನು ಕಂಡು, 10ಅವನಿಗೆ, ‘‘ಎದ್ದೇಳು, ಕಾಲೂರಿ ನಿಂತುಕೋ!’’ ಎಂದು ಗಟ್ಟಿಯಾಗಿ ಹೇಳಿದನು.

---

**ಕಾಲಿನ ಧೂಳನ್ನು ಝಾಡಿಸಿ** ಇದೊಂದು ಎಚ್ಚರಿಕೆ. ಅವರು ಈ ಜನರೊಂದಿಗೆ ಇನ್ನು ಮಾತಾಡುವ ಅಗತ್ಯವಿಲ್ಲ ಎಂಬುದನ್ನು ಇದು ಸೂಚಿಸುತ್ತದೆ.

ಕೂಡಲೇ ಆ ಮನುಷ್ಯನು ನೆಗೆದುನಿಂತು ನಡೆಯಲಾರಂಭಿ
ಸಿದನು. 11ಪೌಲನು ಮಾಡಿದ ಈ ಕಾರ್ಯವನ್ನು ಕಂಡ ಜನರು
ತಮ್ಮ ಸ್ವಂತ ಲುಕವೋನಿಯ ಭಾಷೆಯಲ್ಲಿ ‘‘ದೇವರುಗಳು
ಮನುಷ್ಯರೂಪ ಧರಿಸಿ ನಮ್ಮ ಬಳಿಗೆ ಇಳಿದುಬಂದಿದ್ದಾರೆ!’’
ಎಂದು ಆರ್ಭಟಿಸಿದರು. 12ಜನರು ಬಾರ್ನಬನನ್ನು
‘ಜೆಯುಸ್’* ದೇವರೆಂದೂ ಮುಖ್ಯ ಬೋಧಕನಾಗಿದ್ದ ಪೌಲ
ನನ್ನು ‘ಹೆರ್ಮೆ’* ದೇವರೆಂದೂ ಕರೆದರು. 13ಜೆಯುಸ್‌ನ
ಗುಡಿಯು ಪಟ್ಟಣದ ಸಮೀಪದಲ್ಲಿತ್ತು. ಈ ಗುಡಿಯ ಅರ್ಚಕನು
ಕೆಲವು ಹೋರಿಗಳನ್ನು ಮತ್ತು ಹೂವುಗಳನ್ನು ಪಟ್ಟಣದ
ಬಾಗಿಲಿನ ಬಳಿಗೆ ತೆಗೆದುಕೊಂಡು ಬಂದನು. ಆ ಅರ್ಚಕನು
ಮತ್ತು ಜನರು ಪೌಲ ಬಾರ್ನಬರಿಗೆ ಬಲಿಕೊಟ್ಟು ಅವರನ್ನು
ಆರಾಧಿಸಬೇಕೆಂದಿದ್ದರು.

14ಇದನ್ನು ಕೇಳಿದ ಪೌಲ ಬಾರ್ನಬರು ತಮ್ಮ ಬಟ್ಟೆಗಳನ್ನು
ಹರಿದುಕೊಂಡು* ಜನ ಸಮೂಹದೊಳಕ್ಕೆ ಓಡಿಹೋಗಿ
ಹೀಗೆಂದು ಕೂಗಿ ಹೇಳಿದರು: 15‘‘ಜನರೇ, ನೀವು ಈ ಕಾರ್ಯ
ಗಳನ್ನು ಮಾಡುತ್ತಿರುವುದೇಕೆ? ನಾವು ದೇವರುಗಳಲ್ಲ. ನಾವು
ನಿಮ್ಮಂತೆ ಕೇವಲ ಮನುಷ್ಯರು. ನಿಮಗೆ ಸುವಾರ್ತೆಯನ್ನು
ಹೇಳುವುದಕ್ಕಾಗಿ ನಾವು ಬಂದೆವು. ವ್ಯರ್ಥವಾದ ಈ ಕಾರ್ಯ
ಗಳನ್ನು ನೀವು ಬಿಟ್ಟುಬಿಡಿರಿ; ಜೀವಸ್ವರೂಪನಾದ ದೇವರ ಕಡೆಗೆ
ತಿರುಗಿಕೊಳ್ಳಿರಿ. ಆಕಾಶವನ್ನೂ ಭೂಮಿಯನ್ನೂ ಸಮುದ್ರ
ವನ್ನೂ ಮತ್ತು ಅವುಗಳಲ್ಲಿರುವ ಪ್ರತಿಯೊಂದನ್ನು ಸೃಷ್ಟಿಮಾಡಿ
ದಾತನು ಆತನೇ. 16ಹಿಂದಿನ ಕಾಲದಲ್ಲಿ ದೇವರು ಎಲ್ಲಾ
ಜನಾಂಗಗಳನ್ನು ಅವುಗಳ ಇಷ್ಟಕ್ಕನುಸಾರವಾಗಿ ನಡೆಯಲು
ಬಿಟ್ಟುಕೊಟ್ಟನು. 17ಆದರೆ ತಾನೊಬ್ಬನೇ ನಿಜದೇವರೆಂಬು
ದನ್ನು ಆತನು ತನ್ನ ಒಳ್ಳೆಯ ಕಾರ್ಯಗಳಿಂದ ನಿರೂಪಿಸು
ತ್ತಿದ್ದಾನೆ. ಆತನು ನಿಮಗೆ ಆಕಾಶದಿಂದ ಮಳೆಯನ್ನೂ ನಿಮ್ಮ
ಆಹಾರಕೋಸ್ಕರ ಸಕಾಲದಲ್ಲಿ ಸುಗ್ಗಿಯನ್ನೂ ದಯಪಾಲಿಸಿ
ನಿಮ್ಮ ಹೃದಯಗಳನ್ನು ಆನಂದದಿಂದ ತುಂಬಿಸುತ್ತಿದ್ದಾನೆ.’’
18ಪೌಲ ಬಾರ್ನಬರು ಇಷ್ಟೆಲ್ಲಾ ಹೇಳಿದರೂ ಯಜ್ಞವರ್ಪಿಸಿ
ಆರಾಧಿಸದಂತೆ ಜನರನ್ನು ತಡೆಯಲು ಬಹಳ ಪ್ರಯಾಸ
ಪಡಬೇಕಾಯಿತು. 19ಬಳಿಕ ಕೆಲವು ಯೆಹೂದ್ಯರು
ಅಂತಿಯೋಕ್ಯದಿಂದ ಮತ್ತು ಇಕೋನಿಯದಿಂದ ಬಂದು
ಪೌಲನಿಗೆ ವಿರೋಧವಾಗಿ ಜನರನ್ನು ಹುರಿದುಂಬಿಸಿ ಪೌಲನಿಗೆ
ಕಲ್ಲೆಸೆದು, ಅವನು ಸತ್ತನೆಂದು ಭಾವಿಸಿ ಪಟ್ಟಣದಿಂದ ಹೊರಗೆ
ಎಳೆದುಹಾಕಿದರು. 20ಆದರೆ, ಯೇಸುವಿನ ಶಿಷ್ಯರು ಅವನ
ಸುತ್ತಲೂ ನೆರೆದು ಬಂದಾಗ ಅವನು ಎದ್ದು ಪಟ್ಟಣದೊಳಗೆ
ಹೋದನು. ಮರುದಿನ ಅವನು ಮತ್ತು ಬಾರ್ನಬನು ದರ್ಬೆ
ಪಟ್ಟಣಕ್ಕೆ ಹೋದರು.

## ಸಿರಿಯದ ಅಂತಿಯೋಕ್ಯಕ್ಕೆ ಮರುಪ್ರಯಾಣ

21 ಪೌಲ ಬಾರ್ನಬರು ದರ್ಬೆ ಪಟ್ಟಣದಲ್ಲೂ ಸುವಾರ್ತೆ
ಯನ್ನು ತಿಳಿಸಿದರು. ಅನೇಕ ಜನರು ಯೇಸುವಿನ ಶಿಷ್ಯರಾದರು.
ಪೌಲ ಬಾರ್ನಬರು ಲುಸ್ತ್ರ, ಇಕೋನಿಯ ಮತ್ತು ಅಂತಿಯೋಕ್ಯ
ಪಟ್ಟಣಗಳಿಗೆ ಹಿಂತಿರುಗಿ, 22ಯೇಸುವಿನ ಶಿಷ್ಯರನ್ನು ಬಲ
ಗೊಳಿಸಿ, ನಂಬಿಕೆಯಲ್ಲಿ ದೃಢವಾಗಿರಲು ಅವರಿಗೆ ಪ್ರೋತ್ಸಾಹಿ
ಸಿದರು; ‘‘ನಾವು ದೇವರ ರಾಜ್ಯಕ್ಕೆ ಅನೇಕ ಕಷ್ಟಗಳ ಮೂಲಕ
ಹೋಗಬೇಕಾಗಿದೆ’’ ಎಂದು ಬೋಧಿಸಿದರು. 23ಪೌಲ
ಬಾರ್ನಬರು ಪ್ರತಿಯೊಂದು ಸಭೆಗೂ ಹಿರಿಯರನ್ನು ಆಯ್ಕೆ
ಮಾಡಿದರು. ಅವರು ಈ ಹಿರಿಯರಿಗೋಸ್ಕರ ಉಪವಾಸವಿದ್ದು
ಪ್ರಾರ್ಥನೆ ಮಾಡಿ ಅವರನ್ನು ಪ್ರಭುವಿನ ಕೈಗೆ ಒಪ್ಪಿಸಿಕೊಟ್ಟರು.

24ಪೌಲ ಬಾರ್ನಬರು ಪಿಸಿದಿಯ ನಾಡಿನ ಮೂಲಕವಾಗಿ
ಪಾಂಫಿಲಿಯ ನಾಡಿಗೆ ಬಂದರು. 25ಅವರು ದೇವರ ಸಂದೇಶ
ವನ್ನು ಪೆರ್ಗ ಪಟ್ಟಣದಲ್ಲಿ ಬೋಧಿಸಿ, ಅಲ್ಲಿಂದ ಅತ್ತಾಲಿಯ
ಪಟ್ಟಣಕ್ಕೆ ಬಂದರು. 26ಅಲ್ಲಿಂದ ಅವರು ಸಿರಿಯಾದ ಅಂತಿ
ಯೋಕ್ಯಕ್ಕೆ ನೌಕಾಯಾನ ಮಾಡಿದರು. ಈವರೆಗೆ ಮಾಡಿ
ಮುಗಿಸಿದ್ದ ಸೇವಾಕಾರ್ಯಕ್ಕಾಗಿ ದೇವರ ಕೈಗೆ ಒಪ್ಪಿಸಿ ಕಳುಹಿಸಿ
ಕೊಟ್ಟಿದ್ದವರು ಈ ಪಟ್ಟಣದ ವಿಶ್ವಾಸಿಗಳೇ.

27ಪೌಲ ಬಾರ್ನಬರು ಇಲ್ಲಿಗೆ ತಲುಪಿದಾಗ, ಸಭಿಕರನ್ನೆಲ್ಲ
ಒಟ್ಟುಗೂಡಿಸಿ, ದೇವರು ತಮ್ಮೊಂದಿಗಿದ್ದು ಮಾಡಿದ ಎಲ್ಲಾ
ಕಾರ್ಯಗಳ ಬಗ್ಗೆ ಅವರಿಗೆ ತಿಳಿಸಿದರು. ಮತ್ತು ‘‘ಇತರ ಜನಾಂಗ
ಗಳವರು ಸಹ ನಂಬಿಕೊಳ್ಳುವಂತೆ ದೇವರು ಬಾಗಿಲನ್ನು ತೆರೆದಿ
ದ್ದಾನೆ!’’ ಎಂದು ವಿವರಿಸಿದರು. 28ಅಲ್ಲಿ ಪೌಲ ಬಾರ್ನಬರು
ಯೇಸುವಿನ ಶಿಷ್ಯರೊಂದಿಗೆ ಬಹುಕಾಲ ಇದ್ದರು.

## ಜೆರುಸಲೇಮಿನಲ್ಲಿ ಸಮ್ಮೇಳನ

15 ಬಳಿಕ ಕೆಲವು ಜನರು ಜುದೇಯದಿಂದ ಅಂತಿ
ಯೋಕ್ಯಕ್ಕೆ ಬಂದರು. ‘‘ನೀವು ಸುನ್ನತಿ ಮಾಡಿಸಿಕೊಳ್ಳ
ದಿದ್ದರೆ ನಿಮಗೆ ರಕ್ಷಣೆಯಾಗುವುದಿಲ್ಲ. ಸುನ್ನತಿ ಮಾಡಿಸಿಕೊಳ್ಳ
ಬೇಕೆಂದು ಮೋಶೆಯೇ ಹೇಳಿದ್ದಾನೆ’’ ಎಂದು ಅವರು
ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ಉಪದೇಶಿಸತೊಡಗಿದರು.
2ಪೌಲ ಬಾರ್ನಬರು ಈ ಉಪದೇಶಕ್ಕೆ ತಮ್ಮ ವಿರೋಧವನ್ನು
ವ್ಯಕ್ತಪಡಿಸಿ ಅವರೊಂದಿಗೆ ವಾದ ಮಾಡಿದರು. ಈ ಸಮಸ್ಯೆಯ
ಬಗ್ಗೆ ಅಪೊಸ್ತಲರೊಡನೆ ಮತ್ತು ಹಿರಿಯರೊಡನೆ ಚರ್ಚಿಸಲು
ಪೌಲ ಬಾರ್ನಬರನ್ನು ಮತ್ತು ಇತರ ಕೆಲವರನ್ನು ಜೆರುಸ
ಲೇಮಿಗೆ ಕಳುಹಿಸಲು ಸಭೆ ನಿರ್ಧರಿಸಿತು.

3ಅಂತೆಯೇ ಸಭೆಯು ಇವರನ್ನು ಸಾಗಕಳುಹಿಸಿತು. ಇವರು
ಫೆನಿಷ್ಯ ಮತ್ತು ಸಮಾರ್ಯದ ಮಾರ್ಗವಾಗಿ ಪ್ರಯಾಣಮಾಡಿ
ದರು. ಯೆಹೂದ್ಯರಲ್ಲದ ಜನರು ನಿಜದೇವರ ಕಡೆಗೆ ತಿರುಗಿ
ಕೊಂಡಿದ್ದರ ಬಗ್ಗೆ ಈ ನಾಡುಗಳಲ್ಲಿ ವಿವರಿಸಿದರು. ಇದನ್ನು ಕೇಳಿ
ಸಹೋದರರಿಗೂ ಬಹಳ ಸಂತೋಷವಾಯಿತು. 4ಪೌಲ
ಬಾರ್ನಬರು ಮತ್ತು ಇತರರು ಜೆರುಸಲೇಮನ್ನು ತಲುಪಿದರು.
ಅಪೊಸ್ತಲರು, ಹಿರಿಯರು ಮತ್ತು ಸಭೆಯವರು ಇವರನ್ನು
ಸ್ವಾಗತಿಸಿದರು. ದೇವರು ತಮ್ಮೊಂದಿಗಿದ್ದು ಮಾಡಿದ ಎಲ್ಲಾ
ಕಾರ್ಯಗಳ ಬಗ್ಗೆ ಪೌಲ ಬಾರ್ನಬರು ಮತ್ತು ಇತರರು
ವಿವರಿಸಿದರು. 5ಜೆರುಸಲೇಮಿನಲ್ಲಿದ್ದ ವಿಶ್ವಾಸಿಗಳಲ್ಲಿ ಕೆಲವರು
ಫರಿಸಾಯರ ಗುಂಪಿಗೆ ಸೇರಿದವರಾಗಿದ್ದರು. ಅವರು ಎದ್ದು
ನಿಂತುಕೊಂಡು, ‘‘ಯೆಹೂದ್ಯರಲ್ಲದ ವಿಶ್ವಾಸಿಗಳು ಸುನ್ನತಿ
ಮಾಡಿಸಿಕೊಳ್ಳಬೇಕು. ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯ
ರಾಗಬೇಕೆಂದು ನಾವು ಅವರಿಗೆ ಹೇಳಬೇಕು!’’ ಎಂದರು.

---

**ಜೆಯುಸ್** ಅನೇಕ ಗ್ರೀಕ್ ದೇವರುಗಳಲ್ಲಿ ಅತ್ಯಂತ ಪ್ರಮುಖನಾದ ದೇವರು.

**ಹೆರ್ಮೆ** ಮತ್ತೊಬ್ಬ ಗ್ರೀಕ್ ದೇವರು. ಇತರ ದೇವರುಗಳಿಗೆ ಇವನು ಸಂದೇಶಕನೆಂದು ಗ್ರೀಕರು ನಂಬಿದ್ದರು.

**ಬಟ್ಟೆಗಳನ್ನು ಹರಿದುಕೊಂಡು** ಇದು ಅವರ ಕೋಪವನ್ನು ಸೂಚಿಸುತ್ತದೆ.

[6]ಬಳಿಕ, ಅಪೊಸ್ತಲರು ಮತ್ತು ಹಿರಿಯರು ಈ
ಸಮಸ್ಯೆಯನ್ನು ಪರಿಶೀಲಿಸಲು ಸೇರಿಬಂದರು. [7]ದೀರ್ಘಚರ್ಚೆ
ಯಾಯಿತು. ಬಳಿಕ ಪೇತ್ರ ಎದ್ದುನಿಂತು ಅವರಿಗೆ, ‘‘ನನ್ನ
ಸಹೋದರರೇ, ನಿಮಗೇ ತಿಳಿದಿರುವಂತೆ, ಯೆಹೂದ್ಯರಲ್ಲದ
ಜನರಿಗೆ ಸುವಾರ್ತೆಯನ್ನು ಬೋಧಿಸುವುದಕ್ಕಾಗಿ ನಿಮ್ಮ ಮಧ್ಯ
ದೊಳಗಿಂದ ದೇವರು ನನ್ನನ್ನು ಬಹುದಿನಗಳ ಹಿಂದೆ ಆರಿಸಿ
ಕೊಂಡನು. ಅವರು ನನ್ನಿಂದ ಸುವಾರ್ತೆಯನ್ನು ಕೇಳಿ ನಂಬಿ
ಕೊಂಡರು. [8]ಎಲ್ಲಾ ಜನರ ಆಲೋಚನೆಗಳನ್ನು ಬಲ್ಲ ದೇವರು
ಯೆಹೂದ್ಯರಲ್ಲದ ಜನರನ್ನೂ ಸ್ವೀಕರಿಸಿಕೊಂಡನು. ದೇವರು
ನಮಗೆ ಪವಿತ್ರಾತ್ಮನನ್ನು ಕೊಟ್ಟಂತೆಯೇ ಅವರಿಗೂ ಪವಿತ್ರಾತ್ಮ
ನನ್ನು ಕೊಟ್ಟು ಇದನ್ನು ರುಜುವಾತುಪಡಿಸಿದ್ದಾನೆ. [9]ದೇವರ
ದೃಷ್ಟಿಯಲ್ಲಿ ಅವರಿಗೂ ನಮಗೂ ಯಾವ ವ್ಯತ್ಯಾಸವಿಲ್ಲ. ಅವರು
ನಂಬಿಕೊಂಡಾಗ, ದೇವರು ಅವರ ಹೃದಯಗಳನ್ನು ಶುದ್ಧೀಕರಿ
ಸಿದನು. [10]ಹೀಗಿರಲಾಗಿ, ಯೆಹೂದ್ಯರಲ್ಲದ ಸಹೋದರರ
ಹೆಗಲ ಮೇಲೆ ಭಾರವಾದ ಹೊರೆಯನ್ನು* ಯಾಕೆ ಹೊರಿಸು
ತ್ತೀರಿ? ನೀವು ದೇವರನ್ನು ಸಿಟ್ಟಿಗೆಬ್ಬಿಸಲು ಪ್ರಯತ್ನಿಸು
ತ್ತಿದ್ದೀರಾ? ನಮಗಾಗಲಿ ನಮ್ಮ ಪಿತೃಗಳಿಗಾಗಲಿ ಈ ಹೊರೆ
ಯನ್ನು ಹೊರುವಷ್ಟು ಶಕ್ತಿ ಇರಲಿಲ್ಲ! [11]ಆದ್ದರಿಂದ ನಾವಾಗಲಿ
ಇವರಾಗಲಿ ರಕ್ಷಣೆ ಹೊಂದುವುದು ಪ್ರಭುವಾದ ಯೇಸುವಿನ
ಕೃಪೆಯಿಂದಲೇ ಎಂದು ನಾವು ನಂಬುತ್ತೇವೆ!’’ ಎಂದನು.

[12]ಆಗ ಇಡೀ ಸಭೆಯು ಮೌನವಾಯಿತು. ಅವರು ಪೌಲ
ಬಾರ್ನಬರಿಗೆ ಕಿವಿಗೊಟ್ಟರು. ಯೆಹೂದ್ಯರಲ್ಲದ ಜನರ
ಮಧ್ಯದಲ್ಲಿ ದೇವರು ತಮ್ಮ ಮೂಲಕವಾಗಿ ಮಾಡಿದ ಎಲ್ಲಾ
ಅದ್ಭುತಕಾರ್ಯಗಳ ಮತ್ತು ಸೂಚಕಕಾರ್ಯಗಳ ಬಗ್ಗೆ ಪೌಲ
ಬಾರ್ನಬರು ಹೇಳಿದರು. [13]ಬಳಿಕ ಯಾಕೋಬನು, ‘‘ನನ್ನ
ಸಹೋದರರೇ, ನನಗೆ ಕಿವಿಗೊಡಿರಿ. [14]ಯೆಹೂದ್ಯರಲ್ಲದ
ಜನರಿಗೆ ದೇವರು ತನ್ನ ಪ್ರೀತಿಯನ್ನು ಹೇಗೆ ತೋರಿಸಿದ್ದಾನೆಂದು
ಸೀಮೋನನು ನಮಗೆ ತಿಳಿಸಿದ್ದಾನೆ. ಮೊಟ್ಟಮೊದಲಬಾರಿಗೆ,
ದೇವರು ಯೆಹೂದ್ಯರಲ್ಲದ ಜನರನ್ನು ಸ್ವೀಕರಿಸಿಕೊಂಡನು,
ಅವರನ್ನು ತನ್ನ ಜನರನ್ನಾಗಿ ಮಾಡಿಕೊಂಡನು. [15]ಪ್ರವಾದಿಗಳ
ಮಾತುಗಳು ಸಹ ಇದಕ್ಕೆ ಸಾಮರಸ್ಯವಾಗಿವೆ:

> [16]‘‘ಇದಾದನಂತರ ನಾನು ಹಿಂತಿರುಗುವೆನು. ನಾನು
> ದಾವೀದನ ಮನೆಯನ್ನು ಮತ್ತೆ ಕಟ್ಟುವೆನು.
> ಅದು ಬಿದ್ದುಹೋಗಿದೆ. ಆದರೆ ಕೆಡವಲ್ಪಟ್ಟ
> ಅವನ ಮನೆಯ ಚೂರುಗಳನ್ನು ನಾನು ಮತ್ತೆ
> ಒಂದುಗೂಡಿಸುವೆನು. ನಾನು ಅವನ ಮನೆ
> ಯನ್ನು ಹೊಸದು ಮಾಡುವೆನು.
> [17] ಬಳಿಕ ಇತರ ಜನರೆಲ್ಲರೂ ಪ್ರಭುವಿಗಾಗಿ ಹುಡು
> ಕುವರು. ಯೆಹೂದ್ಯರಲ್ಲದ ಜನರೆಲ್ಲರೂ ಸಹ
> ನನ್ನ ಜನರೇ ಆಗಿದ್ದಾರೆ. ಪ್ರಭುವೇ ಇದನ್ನು
> ಹೇಳಿದ್ದಾನೆ. ಈ ಕಾರ್ಯಗಳನ್ನೆಲ್ಲ ಮಾಡು
> ವವನು ಆತನೇ.
> [18] ಆದಿಯಿಂದಲೂ ಈ ಕಾರ್ಯಗಳನ್ನು ತಿಳಿಯ
> ಪಡಿಸಲಾಗಿದೆ.’
>
> *ಆಮೋಸ 9:11-12*

[19]‘‘ಆದ್ದರಿಂದ, ದೇವರ ಕಡೆಗೆ ತಿರುಗಿಕೊಂಡ ಯೆಹೂದ್ಯ
ರಲ್ಲದ ಸಹೋದರರಿಗೆ ನಾವು ತೊಂದರೆ ಕೊಡಬಾರದು.
[20]ಅದಕ್ಕೆ ಬದಲಾಗಿ ನಾವು ಅವರಿಗೆ ಒಂದು ಪತ್ರವನ್ನು
ಬರೆದು ಈ ವಿಷಯಗಳನ್ನು ತಿಳಿಸೋಣ:

> ವಿಗ್ರಹಗಳಿಗೆ ಅರ್ಪಿಸಿದ ಆಹಾರವನ್ನು ತಿನ್ನ
> ಬೇಡಿರಿ. (ಈ ಆಹಾರ ಅಶುದ್ಧವಾದದ್ದು.)
> ಯಾವುದೇ ಬಗೆಯ ಲೈಂಗಿಕ ಪಾಪವನ್ನು
> ಮಾಡಬೇಡಿ. ರಕ್ತವನ್ನು ತಿನ್ನಬೇಡಿ. ಕುತ್ತಿಗೆ ಹಿಸುಕಿ
> ಕೊಂದ ಪ್ರಾಣಿಗಳ ಮಾಂಸವನ್ನು ತಿನ್ನಬೇಡಿ.

[21]ಅವರು ಇವುಗಳನ್ನು ಮಾಡಕೂಡದು. ಏಕೆಂದರೆ
ಮೋಶೆಯ ಧರ್ಮಶಾಸ್ತ್ರವನ್ನು ಬೋಧಿಸುವಂಥ ಜನರು ಪ್ರತಿ
ಯೊಂದು ಪಟ್ಟಣದಲ್ಲಿ ಇನ್ನೂ ಇದ್ದಾರೆ. ಅನೇಕ ವರ್ಷಗಳಿಂದ
ಪ್ರತಿ ಸಬ್ಬತ್‌ದಿನದಲ್ಲಿ ಮೋಶೆಯ ಮಾತುಗಳನ್ನು ಓದ
ಲಾಗುತ್ತಿದೆ’’ ಎಂದು ಹೇಳಿದನು.

### ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ಪತ್ರ

[22]ಅಪೊಸ್ತಲರು, ಹಿರಿಯರು ಮತ್ತು ಇಡೀ ಸಭೆಯವರು
ಪೌಲ ಬಾರ್ನಬರೊಂದಿಗೆ ಕೆಲವು ಜನರನ್ನು ಅಂತಿಯೋಕ್ಯಕ್ಕೆ
ಕಳುಹಿಸಬಯಸಿದರು. ತಮ್ಮವರೇ ಆದ ಕೆಲವರನ್ನು ಆರಿಸಿ
ಕೊಳ್ಳಲು ಸಭೆಯು ನಿರ್ಧರಿಸಿತು. ಅವರು ಯೂದನನ್ನು
(ಬಾರ್ಸಬನೆಂದೂ ಕರೆಯುತ್ತಿದ್ದರು.) ಮತ್ತು ಸೀಲನನ್ನು
ಆರಿಸಿಕೊಂಡರು. ಇವರು ಜೆರುಸಲೇಮಿನ ಸಭೆಯವರಲ್ಲಿ
ಪ್ರಮುಖರಾಗಿದ್ದರು. [23]ಸಭೆಯು ಇವರ ಕೈಯಲ್ಲಿ ಪತ್ರವನ್ನು
ಕಳುಹಿಸಿಕೊಟ್ಟಿತು. ಆ ಪತ್ರದಲ್ಲಿ ಹೀಗೆ ಬರೆದಿತ್ತು:

> ಅಂತಿಯೋಕ್ಯ ಪಟ್ಟಣದಲ್ಲಿಯೂ ಸಿರಿಯ ಮತ್ತು
> ಸಿಲಿಸಿಯ ನಾಡುಗಳಲ್ಲಿಯೂ ಇರುವ ಯೆಹೂದ್ಯರಲ್ಲದ
> ಸಹೋದರರಿಗೆಲ್ಲಾ, ನಿಮ್ಮ ಸಹೋದರರಾದ ಅಪೊಸ್ತ
> ಲರೂ ಹಿರಿಯರೂ ಬರೆಯುವುದೇನಂದರೆ:
>
> ಪ್ರಿಯ ಸಹೋದರರೇ,
> [24]ನಮ್ಮ ಸಮುದಾಯದಿಂದ ನಿಮ್ಮ ಬಳಿಗೆ ಬಂದ
> ಕೆಲವರು ನಿಮಗೆ ಕೆಲವು ಸಂಗತಿಗಳನ್ನು ಹೇಳುವುದರ
> ಮೂಲಕ ನಿಮ್ಮನ್ನು ತೊಂದರೆಗೆ ಈಡುಮಾಡಿ ನಿಮ್ಮಲ್ಲಿ
> ಗಲಿಬಿಲಿ ಉಂಟುಮಾಡಿದರೆಂಬ ಸಮಾಚಾರ ನಮಗೆ
> ತಿಳಿಯಿತು. ಆದರೆ ಹೀಗೆ ಮಾಡಬೇಕೆಂದು ನಾವು
> ಅವರಿಗೆ ಹೇಳಿರಲಿಲ್ಲ! [25]ಆದುದರಿಂದ ನಾವೆಲ್ಲರೂ
> ಕೆಲವರನ್ನು ಸರ್ವಾನುಮತದಿಂದ ಆರಿಸಿ ನಿಮ್ಮ ಬಳಿಗೆ
> ಕಳುಹಿಸಲು ನಿರ್ಧರಿಸಿದೆವು. ನಮ್ಮ ಪ್ರಿಯ ಸಹೋದರ
> ರಾದ ಬಾರ್ನಬ ಮತ್ತು ಪೌಲರೊಂದಿಗೆ ಅವರು
> ಬರುತ್ತಿದ್ದಾರೆ. [26]ಬಾರ್ನಬನು ಮತ್ತು ಪೌಲನು ನಮ್ಮ
> ಪ್ರಭುವಾದ ಯೇಸು ಕ್ರಿಸ್ತನ ಸೇವೆಗಾಗಿ ತಮ್ಮ ಜೀವಿತ
> ಗಳನ್ನೇ ಕೊಟ್ಟಿದ್ದಾರೆ. [27]ಆದ್ದರಿಂದ ನಾವು ಯೂದನನ್ನು
> ಮತ್ತು ಸೀಲನನ್ನು ಅವರೊಂದಿಗೆ ಕಳುಹಿಸಿದ್ದೇವೆ.
> ಕೆಳಕಂಡ ಸಂಗತಿಗಳನ್ನೆಲ್ಲ ಅವರು ನಿಮಗೆ ತಿಳಿಸುವರು.

---

**ಹೊರೆ** ಯೆಹೂದ್ಯರ ಧರ್ಮಶಾಸ್ತ್ರ.

28ನಿಮಗೆ ಇನ್ನೂ ಹೆಚ್ಚಿನ ಭಾರಗಳು ಇರಕೂಡ
ದೆಂಬುದು ಪವಿತ್ರಾತ್ಮನ ನಿರ್ಧಾರ. ಆದಕ್ಕೆ ನಾವು ಒಪ್ಪಿ
ಕೊಂಡಿದ್ದೇವೆ. ನೀವು ಈ ನಿಯಮಗಳನ್ನು ಮಾತ್ರ
ಅನುಸರಿಸಬೇಕಾಗಿದೆ:

29ವಿಗ್ರಹಗಳಿಗೆ ಅರ್ಪಿಸಿರುವ ಆಹಾರವನ್ನು ತಿನ್ನಬೇಡಿ.
ರಕ್ತವನ್ನು ತಿನ್ನಬೇಡಿ. ಕುತ್ತಿಗೆ ಹಿಸುಕಿ ಕೊಂದ ಪ್ರಾಣಿಗಳ
ಮಾಂಸವನ್ನು ತಿನ್ನಬೇಡಿ. ಯಾವುದೇ ಬಗೆಯ ಲೈಂಗಿಕ
ಪಾಪವನ್ನು ಮಾಡಬೇಡಿ. ನೀವು ಇವುಗಳಿಂದ ದೂರ
ವಿದ್ದರೆ ನಿಮಗೆ ಒಳ್ಳೆಯದಾಗುವುದು.

ನಿಮಗೆ ಶುಭವಾಗಲಿ!

30ಆದ್ದರಿಂದ ಪೌಲ ಬಾರ್ನಬರು ಮತ್ತು ಯೂದ ಸೀಲರು
ಜೆರುಸಲೇಮಿನಿಂದ ಹೊರಟರು. ಅವರು ಅಂತಿಯೋಕ್ಯಕ್ಕೆ
ಹೋಗಿ, ಅಲ್ಲಿ ವಿಶ್ವಾಸಿಗಳ ಸಭೆಸೇರಿಸಿ ಅವರಿಗೆ ಪತ್ರವನ್ನು
ಕೊಟ್ಟರು. 31ವಿಶ್ವಾಸಿಗಳು ಅದನ್ನು ಓದಿ ಬಹು ಸಂತೋಷ
ಪಟ್ಟರು. ಆ ಪತ್ರವು ಅವರನ್ನು ಸಂತೈಸಿತು. 32ಯೂದ ಸೀಲರು
ಸಹ ಪ್ರವಾದಿಗಳಾಗಿದ್ದರು. ಅವರು ಅನೇಕ ಸಂಗತಿಗಳನ್ನು
ಸಹೋದರರಿಗೆ ತಿಳಿಸಿ ಅವರನ್ನು ಬಲಪಡಿಸಿದರು. 33ಯೂದ
ಸೀಲರು ಸ್ವಲ್ಪಕಾಲ ಅಲ್ಲಿದ್ದು ಸಹೋದರರಿಂದ ಸಮಾಧಾನ
ವೆಂಬ ಆಶೀರ್ವಾದವನ್ನು ಪಡೆದುಕೊಂಡರು. ಬಳಿಕ ಅವರು
ತಮ್ಮನ್ನು ಕಳುಹಿಸಿಕೊಟ್ಟಿದ್ದ ಜೆರುಸಲೇಮಿನ ಸಹೋದರರ
ಬಳಿಗೆ ಹಿಂತಿರುಗಿದರು. 34*

35ಆದರೆ ಪೌಲ ಬಾರ್ನಬರು ಅಂತಿಯೋಕ್ಯದಲ್ಲಿ
ತಂಗಿದ್ದು, ಇತರ ಅನೇಕರೊಂದಿಗೆ ಸೇರಿಕೊಂಡು ಸುವಾರ್ತೆ
ಯನ್ನು ಸಾರಿದರು ಮತ್ತು ಪ್ರಭುವಿನ ಸಂದೇಶವನ್ನು ಜನರಿಗೆ
ಬೋಧಿಸಿದರು.

## ಪೌಲ ಬಾರ್ನಬರು ಬೇರ್ಪಡುವರು

36ಕೆಲವು ದಿನಗಳಾದ ಮೇಲೆ ಪೌಲನು ಬಾರ್ನಬನಿಗೆ,
‘‘ನಾವು ಅನೇಕ ಪಟ್ಟಣಗಳಲ್ಲಿ ಪ್ರಭುವಿನ ಸಂದೇಶವನ್ನು ತಿಳಿಸಿ
ದೆವು. ಆ ಪಟ್ಟಣಗಳಲ್ಲಿರುವ ನಮ್ಮ ಸಹೋದರ ಸಹೋದರಿ
ಯರನ್ನು ಸಂದರ್ಶಿಸಿ ಅವರು ಹೇಗಿದ್ದಾರೆಂದು ನೋಡಿ
ಕೊಂಡು ಬರೋಣ’’ ಎಂದು ಹೇಳಿದನು. 37ಮಾರ್ಕನೆನಿಸಿ
ಕೊಳ್ಳುವ ಯೋಹಾನನನ್ನು ಸಹ ತಮ್ಮೊಂದಿಗೆ ಕರೆದುಕೊಂಡು
ಹೋಗಬೇಕೆಂಬುದು ಬಾರ್ನಬನ ಇಷ್ಟವಾಗಿತ್ತು. 38ಆದರೆ
ಅವರ ಮೊದಲನೆ ಪ್ರಯಾಣದಲ್ಲಿ, ಮಾರ್ಕನೆನಿಸಿಕೊಳ್ಳುವ
ಯೋಹಾನನು ಅವರನ್ನು ಪಾಂಫಿಲಿಯದ ಬಳಿ ಬಿಟ್ಟು
ಹೋದನು. ಅವನು ಅವರೊಂದಿಗೆ ಸೇವೆಯಲ್ಲಿ ಮುಂದು
ವರಿಯಲಿಲ್ಲ. ಆದ್ದರಿಂದ ಅವನನ್ನು ಕರೆದುಕೊಂಡು ಹೋಗು
ವುದು ಒಳ್ಳೆಯ ಆಲೋಚನೆಯಲ್ಲವೆಂದು ಪೌಲನು ಯೋಚಿಸಿ
ದನು. 39ಇದರ ಬಗ್ಗೆ ಪೌಲ ಮತ್ತು ಬಾರ್ನಬರ ನಡುವೆ ದೊಡ್ಡ
ವಾಗ್ವಾದವೇ ನಡೆಯಿತು. ಅವರಿಬ್ಬರೂ ಬೇರ್ಪಟ್ಟು ಬೇರೆ
ಮಾರ್ಗಗಳಲ್ಲಿ ಹೋದರು. ಬಾರ್ನಬನು ಮಾರ್ಕನೊಂದಿಗೆ
ಸೈಪ್ರಸ್‌ಗೆ ನೌಕಾಯಾನ ಮಾಡಿದನು. 40ಪೌಲನು ತನ್ನೊಂದಿಗೆ
ಸೀಲನನ್ನು ಕರೆದುಕೊಂಡು ಹೋದನು. ಅಂತಿಯೋಕ್ಯದ
ಸಹೋದರರು ಪೌಲನನ್ನು ಪ್ರಭುವಿನ ಆಶ್ರಯಕ್ಕೆ ಒಪ್ಪಿಸಿ
ಕಳುಹಿಸಿಕೊಟ್ಟರು. 41ಪೌಲ ಸೀಲರು ಸಿರಿಯಾ ಮತ್ತು
ಸಿಲಿಸಿಯ ನಾಡುಗಳಲ್ಲಿ ಹಾದು ಹೋಗುತ್ತಾ ಅಲ್ಲಿದ್ದ ಸಭೆಗಳಿಗೆ
ಬಲವಾಗಿ ಬೆಳೆಯಲು ನೆರವು ನೀಡಿದರು.

## ತಿಮೊಥೆಯನು ಪೌಲ ಸೀಲರೊಂದಿಗೆ ಹೋಗುವನು

16 ಪೌಲನು ದರ್ಬೆ ಮತ್ತು ಲುಸ್ತ್ರ ಪಟ್ಟಣಗಳಿಗೆ
ಹೋದನು. ತಿಮೊಥೆಯ ಎಂಬ ಕ್ರಿಸ್ತನ ಶಿಷ್ಯ
ನೊಬ್ಬನು ಅಲ್ಲಿದ್ದನು. ತಿಮೊಥೆಯನ ತಾಯಿ ಯೆಹೂದ್ಯ
ವಿಶ್ವಾಸಿಯಾಗಿದ್ದಳು. ಅವನ ತಂದೆಯು ಗ್ರೀಕನಾಗಿದ್ದನು.
2ಲುಸ್ತ್ರ ಮತ್ತು ಇಕೋನಿಯಾ ಪಟ್ಟಣಗಳ ವಿಶ್ವಾಸಿಗಳು ತಿಮೊಥೆ
ಯನನ್ನು ಗೌರವಿಸುತ್ತಿದ್ದರು; ಮತ್ತು ಅವನ ಬಗ್ಗೆ ಒಳ್ಳೆಯದನ್ನೇ
ಹೇಳುತ್ತಿದ್ದರು. 3ಪೌಲನು ತಿಮೊಥೆಯನನ್ನು ತಮ್ಮೊಂದಿಗೆ
ಕರೆದುಕೊಂಡು ಹೋಗಲು ಅಪೇಕ್ಷಿಸಿದನು. ಆದರೆ ಆ ಪ್ರದೇಶ
ದಲ್ಲಿ ವಾಸವಾಗಿದ್ದ ಎಲ್ಲಾ ಜನರಿಗೂ ತಿಮೊಥೆಯನ ತಂದೆ
ಗ್ರೀಕನೆಂಬುದು ಗೊತ್ತಿತ್ತು. ಆದ್ದರಿಂದ ಪೌಲನು ಯೆಹೂದ್ಯ
ರನ್ನು ಮೆಚ್ಚಿಸುವುದಕ್ಕಾಗಿ ತಿಮೊಥೆಯನಿಗೆ ಸುನ್ನತಿ ಮಾಡಿಸಿ
ದನು.

4ಬಳಿಕ ಪೌಲನು ಮತ್ತು ಅವನ ಸಂಗಡಿಗರು ಬೇರೆ
ಪಟ್ಟಣಗಳ ಮೂಲಕ ಪ್ರಯಾಣ ಮಾಡಿದರು. ಜೆರುಸಲೇಮಿ
ನಲ್ಲಿರುವ ಅಪೊಸ್ತಲರ ಮತ್ತು ಹಿರಿಯರ ನಿಯಮಗಳನ್ನೂ
ತೀರ್ಮಾನಗಳನ್ನೂ ಅವರು ವಿಶ್ವಾಸಿಗಳಿಗೆ ಕೊಟ್ಟು ಅವುಗಳಿಗೆ
ವಿಧೇಯರಾಗಬೇಕೆಂದು ತಿಳಿಸಿದರು. 5ಇದರಿಂದಾಗಿ ಸಭೆಗಳು
ನಂಬಿಕೆಯಲ್ಲಿ ಬಲವಾಗತೊಡಗಿದವು ಮತ್ತು ಸಂಖ್ಯೆಯಲ್ಲಿ
ದಿನದಿನಕ್ಕೂ ಹೆಚ್ಚಾಗತೊಡಗಿದವು.

## ಏಷ್ಯಾದಿಂದಾಚೆಗೆ ಬರಲು ಪೌಲನಿಗೆ ಕರೆ

6ಪೌಲನು ಮತ್ತು ಅವನ ಸಂಗಡಿಗರು ಫ್ರಿಜಿಯ ಮತ್ತು
ಗಲಾತ್ಯ ಪ್ರಾಂತ್ಯಗಳ ಮೂಲಕ ಹಾದುಹೋದರು. ಏಷ್ಯಾ*
ಸೀಮೆಯಲ್ಲಿ ಸುವಾರ್ತೆಯನ್ನು ತಿಳಿಸದಂತೆ ಪವಿತ್ರಾತ್ಮನು
ಅವರನ್ನು ತಡೆದನು. 7ಪೌಲ ತಿಮೊಥೆಯರು ಮುಸಿಯ ನಾಡಿನ
ಸಮೀಪಕ್ಕೆ ಹೋದರು ಅವರು ಬಿಥೂನಿಯ ನಾಡಿನೊಳಗೆ
ಹೋಗಬೇಕೆಂದಿದ್ದರು, ಆದರೆ ಯೇಸುವಿನ ಆತ್ಮನು ಅಲ್ಲಿಗೆ
ಹೋಗದಂತೆ ಅವರನ್ನು ತಡೆದನು. 8ಆದ್ದರಿಂದ ಅವರು
ಮುಸಿಯ ನಾಡನ್ನು ಹಾದು ನೇರವಾಗಿ ತ್ರೋವ ಪಟ್ಟಣಕ್ಕೆ
ಬಂದರು. 9ಆ ರಾತ್ರಿ ಪೌಲನಿಗೆ ಒಂದು ದರ್ಶನವಾಯಿತು.
ಈ ದರ್ಶನದಲ್ಲಿ ಮಕೆದೋನಿಯದ ನಾಡಿನಿಂದ ಬಂದ ಒಬ್ಬ
ಮನುಷ್ಯನು ಅಲ್ಲಿ ನಿಂತುಕೊಂಡು, ‘‘ಮಕೆದೋನಿಯಕ್ಕೆ
ಬಂದು ನಮಗೆ ಸಹಾಯಮಾಡು’’ ಎಂದು ಬೇಡಿಕೊಂಡನು.
10ಪೌಲನು ಆ ದರ್ಶನವನ್ನು ಕಂಡಕೂಡಲೇ, ಅಲ್ಲಿಯ ಜನರಿಗೆ
ಸುವಾರ್ತೆಯನ್ನು ತಿಳಿಸುವುದಕ್ಕಾಗಿ ದೇವರು ನಮ್ಮನ್ನು
ಕರೆದಿದ್ದಾನೆಂದು ಅರ್ಥಮಾಡಿಕೊಂಡು ಮಕೆದೋನಿಯಕ್ಕೆ
ಹೋಗಲು ನಾವು ಸಿದ್ಧರಾದೆವು.

---

**ವಚನ 34** ಈ ಪುಸ್ತಕದ ಇತ್ತೀಚಿನ ಕೆಲವು ಗ್ರೀಕ್ ಪ್ರತಿಗಳಲ್ಲಿ 34ನೇ ವಚನವನ್ನು ಸೇರಿಸಲಾಗಿದೆ: **34** ‘‘ಆದರೆ ಸೀಲನು ಅಲ್ಲೇ ಇರಲು ನಿರ್ಧರಿಸಿದನು.’’

**ಏಷ್ಯಾ** ಏಷ್ಯಾ ಮೈನರ್‌ನ ಪಶ್ಚಿಮ ಭಾಗ.

### ಲಿಡಿಯಳ ಪರಿವರ್ತನೆ

[11]ನಾವು ತ್ರೋವದಿಂದ ಹಡಗಿನಲ್ಲಿ ಹೊರಟು ಸಮೊಥ್ರ
ದ್ವೀಪಕ್ಕೆ ಬಂದು ಮರುದಿನ ನೆಯಪೊಲಿಸ್ ಪಟ್ಟಣವನ್ನು
ತಲುಪಿ, [12]ಅಲ್ಲಿಂದ ಫಿಲಿಪ್ಪಿಗೆ ಹೋದೆವು. ಅದು ಮಕೆದೋನಿ
ಯದ ಜಿಲ್ಲೆಯಲ್ಲಿ ಮತ್ತು ರೋಮನ್ನರ ವಸಾಹತುವಿನಲ್ಲಿ*
ಮುಖ್ಯವಾದ ಪಟ್ಟಣವಾಗಿತ್ತು. ನಾವು ಅಲ್ಲಿ ಕೆಲವು ದಿನಗಳ
ವರೆಗೆ ಇಳಿದುಕೊಂಡೆವು.

[13]ನದಿಯ ಸಮೀಪದಲ್ಲಿ ವಿಶೇಷವಾದ ಪ್ರಾರ್ಥನಾ
ಸ್ಥಳವನ್ನು ನಾವು ಕಾಣಬಹುದೆಂದು ಆಲೋಚಿಸಿಕೊಂಡು
ಸಬ್ಬತ್‌ದಿನದಂದು ನದಿಯ ಬಳಿಗೆ ಹೋಗಲು ನಗರದ್ವಾರ
ದಿಂದ ಹೊರಗೆ ಹೋದೆವು. ಕೆಲವು ಸ್ತ್ರೀಯರು ಅಲ್ಲಿ ಸೇರಿ
ಬಂದಿದ್ದರು. ಆದ್ದರಿಂದ ನಾವು ಕುಳಿತುಕೊಂಡು ಅವರೊಂದಿಗೆ
ಮಾತಾಡಿದೆವು. [14]ಅಲ್ಲಿ ಲಿಡಿಯಾ ಎಂಬ ಒಬ್ಬ ಹೆಂಗಸಿದ್ದಳು.
ಆಕೆಯು ಥುವತ್ತೈರ ಪಟ್ಟಣದವಳು. ಕೆನ್ನೀರಳೆ ಬಣ್ಣದ ಬಟ್ಟೆ
ಗಳನ್ನು ಮಾರುವುದು ಆಕೆಯ ಕಸುಬಾಗಿತ್ತು. ಆಕೆಯು ನಿಜ
ದೇವರನ್ನು ಆರಾಧಿಸುತ್ತಿದ್ದಳು. ಪೌಲನ ಮಾತನ್ನು ಲಿಡಿಯಾ
ಆಲಿಸುತ್ತಿದ್ದಳು. ಪ್ರಭುವು ಆಕೆಯ ಹೃದಯವನ್ನು ತೆರೆದನು.
ಪೌಲನು ಹೇಳಿದ ಸಂಗತಿಗಳನ್ನು ಆಕೆ ನಂಬಿಕೊಂಡಳು. [15]ಆಕೆ
ಮತ್ತು ಆಕೆಯ ಮನೆಯಲ್ಲಿ ವಾಸವಾಗಿದ್ದ ಎಲ್ಲಾ ಜನರು
ದೀಕ್ಷಾಸ್ನಾನ ಮಾಡಿಸಿಕೊಂಡರು. ಆಕೆಯು, ‘‘ನಾನು ಪ್ರಭು
ಯೇಸುವಿನಲ್ಲಿ ನಿಜವಾದ ವಿಶ್ವಾಸಿಯೆಂದು ನೀವು ಯೋಚಿಸು
ವುದಾಗಿದ್ದರೆ, ನನ್ನ ಮನೆಗೆ ಬಂದು ತಂಗಿರಿ’’ ಎಂದು ಕೇಳಿ
ಕೊಂಡು ನಮ್ಮನ್ನು ಒತ್ತಾಯಮಾಡಿದಳು.

### ಸೆರೆಮನೆಯಲ್ಲಿ ಪೌಲ ಸೀಲರು

[16]ಒಂದು ಸಲ, ನಾವು ಪ್ರಾರ್ಥನಾಸ್ಥಳಕ್ಕೆ ಹೋಗುತ್ತಿದ್ದಾಗ
ಒಂದು ಸಂಗತಿ ಸಂಭವಿಸಿತು. ದಾಸಿಯೊಬ್ಬಳು ನಮ್ಮನ್ನು
ಎದುರುಗೊಂಡಳು. ಆಕೆಯಲ್ಲಿ ವಿಶೇಷವಾದ ಆತ್ಮವಿತ್ತು. ಆ
ಆತ್ಮದ ಶಕ್ತಿಯಿಂದ ಅವಳು ಮುಂದೆ ಸಂಭವಿಸುವ ಸಂಗತಿಗಳ
ಬಗ್ಗೆ ಹೇಳುತ್ತಿದ್ದಳು. ಇದರ ಮೂಲಕವಾಗಿ ಆಕೆ ತನ್ನ ಯಜ
ಮಾನರಿಗೆ ಬಹಳ ಹಣವನ್ನು ಗಳಿಸಿ ಕೊಡುತ್ತಿದ್ದಳು. [17]ಅವಳು
ಪೌಲನನ್ನು ಮತ್ತು ನಮ್ಮನ್ನು ಹಿಂಬಾಲಿಸುತ್ತಾ, ‘‘ ಈ ಜನರು
ಮಹೋನ್ನತನಾದ ದೇವರ ಸೇವಕರು! ನೀವು ಹೇಗೆ ರಕ್ಷಣೆ
ಹೊಂದಬಹುದೆಂಬುದನ್ನು ಅವರು ಹೇಳುತ್ತಿದ್ದಾರೆ!’’ ಎಂದು
ಕೂಗುತ್ತಿದ್ದಳು. [18]ಹೀಗೆ ಆಕೆ ಅನೇಕ ದಿನಗಳವರೆಗೆ ಮಾಡಿ
ದಳು. ಇದರಿಂದ ಬೇಸರಗೊಂಡ ಪೌಲನು ಹಿಂತಿರುಗಿ, ಆ
ಆತ್ಮಕ್ಕೆ, ‘‘ಅವಳನ್ನು ಬಿಟ್ಟು ಹೋಗಬೇಕೆಂದು ಯೇಸು ಕ್ರಿಸ್ತನ
ಹೆಸರಿನಲ್ಲಿ ನಿನಗೆ ಆಜ್ಞಾಪಿಸುತ್ತೇನೆ!’’ ಎಂದು ಹೇಳಿದನು. ಆ
ಕೂಡಲೇ ಆ ಆತ್ಮವು ಹೊರಬಂದಿತು.

[19]ಇದನ್ನು ಕಂಡ ಅವಳ ಯಜಮಾನರು ಈಗ ಆಕೆಯಿಂದ
ಹಣಗಳಿಸಲು ಸಾಧ್ಯವಿಲ್ಲವೆಂದು ಅರಿತುಕೊಂಡರು. ಆದ್ದರಿಂದ
ಅವರು ಪೌಲ ಸೀಲರನ್ನು ಹಿಡಿದು ಪಟ್ಟಣದ ನ್ಯಾಯಸ್ಥಾನಕ್ಕೆ
ಎಳೆದುಕೊಂಡು ಹೋದರು. ನಗರಾಧಿಕಾರಿಗಳು ಅಲ್ಲಿದ್ದರು.
[20]ಆ ಜನರು ಪೌಲ ಸೀಲರನ್ನು ನ್ಯಾಯಾಧೀಶರ ಬಳಿಗೆ ತಂದು,
‘‘ಈ ಜನರು ಯೆಹೂದ್ಯರು. ಇವರು ನಮ್ಮ ಪಟ್ಟಣದಲ್ಲಿ ಗಲಭೆ
ಎಬ್ಬಿಸುತ್ತಿದ್ದಾರೆ. [21]ನಿಷಿದ್ಧ ಕಾರ್ಯಗಳನ್ನು ಮಾಡುವಂತೆ
ಇವರು ಜನರಿಗೆ ಹೇಳುತ್ತಿದ್ದಾರೆ. ರೋಮ್ ಪ್ರಜೆಗಳಾಗಿರುವ
ನಾವು ಅಂಥ ಕಾರ್ಯಗಳನ್ನು ಮಾಡಲು ಸಾಧ್ಯವಿಲ್ಲ’’ ಎಂದು
ಹೇಳಿದರು. [22]ಜನರು ಪೌಲ ಸೀಲರಿಗೆ ವಿರೋಧವಾಗಿದ್ದರು.
ಆಗ ನಾಯಕರು ಪೌಲ ಸೀಲರ ಬಟ್ಟೆಗಳನ್ನು ಹರಿದುಹಾಕಿಸಿ
ಅವರಿಬ್ಬರಿಗೂ ಕೋಲುಗಳಿಂದ ಬಲವಾಗಿ ಹೊಡೆಸಿ, ಸೆರೆ
ಮನೆಗೆ ಹಾಕಿಸಿದರು. [23]ಬಳಿಕ ಸೆರೆಮನೆಯ ಅಧಿಕಾರಿಗೆ,
‘‘ಅವರನ್ನು ಬಹು ಎಚ್ಚರಿಕೆಯಿಂದ ಕಾಯಿರಿ!’’ ಎಂದು ಆಜ್ಞಾಪಿ
ಸಿದರು. [24]ಆದ್ದರಿಂದ ಸೆರೆಮನೆಯ ಅಧಿಕಾರಿಯು ಅವರನ್ನು
ಸೆರೆಮನೆಯ ಒಳಕೋಣೆಗೆ ಹಾಕಿಸಿ, ಅವರ ಕಾಲುಗಳನ್ನು
ಮರದ ದಿಮ್ಮಿಗಳಿಗೆ ಬಿಗಿಸಿದನು.

[25]ಸುಮಾರು ಮಧ್ಯರಾತ್ರಿಯಲ್ಲಿ ಪೌಲ ಸೀಲರು ಪ್ರಾರ್ಥನೆ
ಮಾಡುತ್ತಾ ದೇವರಿಗೆ ಸ್ತುತಿಗೀತೆಗಳನ್ನು ಹಾಡುತ್ತಾ ಇದ್ದರು.
ಇತರ ಕೈದಿಗಳೆಲ್ಲರೂ ಆಲಿಸುತ್ತಿದ್ದರು. [26]ಇದ್ದಕ್ಕಿದಂತೆ ದೊಡ್ಡ
ಭೂಕಂಪವಾಯಿತು. ಭೀಕರವಾಗಿದ್ದ ಅದು ಸೆರೆಮನೆಯ ಅಡಿ
ಪಾಯವನ್ನೇ ನಡುಗಿಸಿತು. ಆಗ ಸೆರೆಮನೆಯ ಬಾಗಿಲುಗಳೆಲ್ಲಾ
ತೆರೆದುಕೊಂಡವು. ಎಲ್ಲಾ ಕೈದಿಗಳ ಸರಪಣಿಗಳು ಕಳಚಿಬಿದ್ದವು.
[27]ಆಗ ಸೆರೆಮನೆಯ ಅಧಿಕಾರಿಗೆ ಎಚ್ಚರವಾಯಿತು. ಸೆರೆಮನೆಯ
ಬಾಗಿಲುಗಳು ತೆರೆದುಕೊಂಡಿರುವುದನ್ನು ಕಂಡು ಈಗಾಗಲೇ
ಕೈದಿಗಳು ತಪ್ಪಿಸಿಕೊಂಡಿದ್ದಾರೆಂದು ಅವನು ಭಾವಿಸಿದನು.
ಆದ್ದರಿಂದ ಅವನು ತನ್ನ ಕತ್ತಿಯನ್ನು ತೆಗೆದುಕೊಂಡು ಆತ್ಮಹತ್ಯೆ
ಮಾಡಿಕೊಳ್ಳಬೇಕೆನ್ನುವಷ್ಟರಲ್ಲಿಯೇ [28]ಪೌಲನು ಅವನಿಗೆ,
‘‘ಹಾನಿ ಮಾಡಿಕೊಳ್ಳಬೇಡ! ನಾವೆಲ್ಲಾ ಇಲ್ಲೇ ಇದ್ದೇವೆ!’’ ಎಂದು
ಕೂಗಿ ಹೇಳಿದನು.

[29]ಸೆರೆಮನೆಯ ಅಧಿಕಾರಿಯು ಒಬ್ಬನಿಗೆ ದೀಪವನ್ನು ತರ
ಬೇಕೆಂದು ಹೇಳಿದನು. ಬಳಿಕ ಅವನು ಒಳಗೆ ಓಡಿಹೋದನು.
ಅವನು ನಡುಗುತ್ತಾ ಪೌಲ ಸೀಲರ ಮುಂದೆ ಕುಸಿದುಬಿದ್ದನು.
[30]ಬಳಿಕ ಅವನು ಅವರನ್ನು ಹೊರಗೆ ಕರೆದುಕೊಂಡು ಬಂದು,
‘‘ಸ್ವಾಮಿಗಳೇ, ನಾನು ರಕ್ಷಣೆ ಹೊಂದಬೇಕಾದರೆ ಏನು ಮಾಡ
ಬೇಕು?’’ ಎಂದು ಕೇಳಿದನು. [31]ಅವರು ಅವನಿಗೆ, ‘‘ಪ್ರಭು
ಯೇಸುವಿನಲ್ಲಿ ನಂಬಿಕೆಯಿಡು. ಆಗ ನೀನು ರಕ್ಷಣೆ ಹೊಂದುವೆ
ಮತ್ತು ನಿನ್ನ ಮನೆಯವರೆಲ್ಲರೂ ರಕ್ಷಣೆ ಹೊಂದುವರು’’
ಎಂದು ಹೇಳಿ, [32]ಅವನಿಗೂ ಅವನ ಮನೆಯವರೆಲ್ಲರಿಗೂ
ಪ್ರಭುವಿನ ಸಂದೇಶವನ್ನು ತಿಳಿಸಿದರು.

[33]ಆಗ ಮಧ್ಯರಾತ್ರಿ ಕಳೆದಿತ್ತು. ಆದರೂ ಅವನು ಪೌಲ
ಸೀಲರನ್ನು ಕರೆದೊಯ್ದು ಅವರ ಗಾಯಗಳನ್ನು ತೊಳೆದನು.
ಬಳಿಕ ಅವನು ಮತ್ತು ಅವನ ಮನೆಯವರೆಲ್ಲರೂ ದೀಕ್ಷಾಸ್ನಾನ
ಮಾಡಿಸಿಕೊಂಡರು. [34]ಇದಾದ ಮೇಲೆ ಅವನು ಪೌಲ
ಸೀಲರನ್ನು ಮನೆಗೆ ಕರೆದೊಯ್ದು ಅವರಿಗೆ ಊಟ ಮಾಡಿಸಿ
ದನು. ಆ ಜನರೆಲ್ಲರೂ ಪ್ರಭುವಿನಲ್ಲಿ ನಂಬಿಕೆ ಇಟ್ಟದ್ದರಿಂದ
ಬಹು ಸಂತೋಷಭರಿತರಾದರು.

[35]ಮರುದಿನ ಮುಂಜಾನೆ ನಾಯಕರು ಸೆರೆಮನೆಯ
ಅಧಿಕಾರಿಗೆ, ‘‘ ಈ ಜನರನ್ನು ಬಿಟ್ಟುಬಿಡು!’’ ಎಂದು ಕೆಲವು
ಸೈನಿಕರ ಮೂಲಕ ಹೇಳಿ ಕಳುಹಿಸಿದರು.

[36]ಸೆರೆಮನೆಯ ಅಧಿಕಾರಿಯು ಪೌಲನಿಗೆ, ‘‘ನಮ್ಮ
ನಾಯಕರು ನಿಮ್ಮನ್ನು ಬಿಡುಗಡೆ ಮಾಡಬೇಕೆಂದು ಸೈನಿಕರ
ಮೂಲಕ ಹೇಳಿ ಕಳುಹಿಸಿದ್ದಾರೆ, ಈಗ ನೀವು ಸಮಾಧಾನದಿಂದ
ಹೋಗಿರಿ’’ ಎಂದು ಹೇಳಿದನು.

---

**ವಸಾಹತು** ವಲಸೆ ಹೊರಟವರು ಸ್ಥಾಪಿಸಿದ ಸ್ವತಂತ್ರ ನಗರ.

37ಆದರೆ ಪೌಲನು, ‘‘ನಾವು ಏನು ತಪ್ಪು ಮಾಡಿ
ದ್ದೇವೆಂಬುದನ್ನು ನಿಮ್ಮ ನಾಯಕರು ನಿರೂಪಿಸದೆ ನಮ್ಮನ್ನು
ಜನರ ಎದುರಿನಲ್ಲಿ ಹೊಡೆಸಿ ಸೆರೆಮನೆಗೆ ಹಾಕಿಸಿದರು. ನಾವು
ರೋಮಿನ ಪ್ರಜೆಗಳು. ಆದ್ದರಿಂದ ನಮಗೂ ಹಕ್ಕುಗಳಿವೆ. ಈಗ
ಅವರು ನಮ್ಮನ್ನು ಗೋಪ್ಯವಾಗಿ ಬಿಡುಗಡೆ ಮಾಡಬೇಕೆಂದಿ
ರುವರೇ? ಇಲ್ಲ! ನಾಯಕರೇ ಬಂದು ನಮ್ಮನ್ನು ಹೊರಗೆ ಕರೆದು
ಕೊಂಡು ಹೋಗಬೇಕು!’’ ಎಂದು ಹೇಳಿದನು.
38ಆ ಸೈನಿಕರು ನಾಯಕರ ಬಳಿಗೆ ಹೋಗಿ ಪೌಲ ಹೇಳಿ
ದ್ದನ್ನೆಲ್ಲ ತಿಳಿಸಿದರು. ಪೌಲ ಸೀಲರು ರೋಮಿನ ಪ್ರಜೆಗಳೆಂಬು
ದನ್ನು ಕೇಳಿದ ಕೂಡಲೇ ನಾಯಕರಿಗೆ ಭಯವಾಯಿತು.
39ಆದ್ದರಿಂದ ಅವರು ಪೌಲ ಸೀಲರ ಬಳಿಗೆ ಬಂದು ಕ್ಷಮೆ
ಕೇಳಿದರು. ಅಲ್ಲದೆ ಅವರನ್ನು ಸೆರೆಮನೆಯಿಂದ ಹೊರಗೆ
ಕರೆದುಕೊಂಡು ಹೋದರು ಮತ್ತು ತಮ್ಮ ಪಟ್ಟಣವನ್ನು ಬಿಟ್ಟು
ಹೋಗಬೇಕೆಂದು ಕೇಳಿಕೊಂಡರು.
40ಆದರೆ ಪೌಲ ಸೀಲರು ಸೆರೆಮನೆಯಿಂದ ಹೊರಟು
ಲಿಡಿಯಾಳ ಮನೆಗೆ ಹೋದರು. ಅಲ್ಲಿ ಅವರು ಕೆಲವು ವಿಶ್ವಾಸಿ
ಗಳನ್ನು ಕಂಡು ಅವರನ್ನು ಸಂತೈಸಿದರು. ಬಳಿಕ ಪೌಲ ಸೀಲರು
ಅಲ್ಲಿಂದ ಹೊರಟು ಹೋದರು.

## ಥೆಸಲೋನಿಕದಲ್ಲಿ ಪೌಲ ಸೀಲರು

17 ಪೌಲ ಸೀಲರು ಆಂಫಿಪೊಲಿ ಮತ್ತು
ಅಪೊಲೋನಿಯ ಮಾರ್ಗವಾಗಿ ಪ್ರಯಾಣ ಮಾಡಿ
ಥೆಸಲೋನಿಕ ಪಟ್ಟಣಕ್ಕೆ ಬಂದರು. ಆ ಪಟ್ಟಣದಲ್ಲಿ ಯೆಹೂದ್ಯರ
ಒಂದು ಸಭಾಮಂದಿರವಿತ್ತು. 2ಪೌಲನು ಎಂದಿನಂತೆ ಯೆಹೂದ್ಯ
ರನ್ನು ಭೇಟಿಯಾಗಲು ಈ ಸಭಾಮಂದಿರದೊಳಗೆ ಹೋದನು.
ಅವನು ಮೂರು ವಾರಗಳವರೆಗೆ ಪ್ರತಿ ಸಬ್ಬತ್‌ದಿನದಂದು
ಯೆಹೂದ್ಯರೊಂದಿಗೆ ಪವಿತ್ರ ಗ್ರಂಥದ ಆಧಾರದೊಡನೆ
ಚರ್ಚಿಸಿ ವಿವರಿಸಿದನು. 3ಕ್ರಿಸ್ತನು ಸತ್ತು ಸಮಾಧಿಯೊಳಗಿಂದ
ಎದ್ದು ಬರಲೇಬೇಕಿತ್ತು ಎಂಬುದನ್ನು ತೋರಿಸಿಕೊಟ್ಟನು.
‘‘ನಾನು ನಿಮಗೆ ತಿಳಿಸುತ್ತಿರುವ ಈ ಯೇಸುವೇ ಕ್ರಿಸ್ತನು’’ ಎಂದು
ಪೌಲನು ಸ್ಪಷ್ಟಪಡಿಸಿದನು. 4ನಿಜದೇವರನ್ನು ಪ್ರೀತಿಸುತ್ತಿದ್ದ
ಕೆಲವು ಮಂದಿ ಗ್ರೀಕರು ಮತ್ತು ಕೆಲವು ಮಂದಿ ಪ್ರಮುಖ
ಸ್ತ್ರೀಯರು ಅಲ್ಲಿದ್ದರು. ಅವರಲ್ಲಿ ಅನೇಕರಿಗೆ ಮನವರಿಕೆಯಾಗಿ
ಪೌಲ ಸೀಲರನ್ನು ಸೇರಿಕೊಂಡರು.
5ಆದರೆ ನಂಬದೆಹೋದ ಯೆಹೂದ್ಯರು ಅಸೂಯೆ
ಗೊಂಡರು. ಅವರು ಪಟ್ಟಣದಲ್ಲಿದ್ದ ಕೆಲವು ಕೆಡುಕರಿಗೆ ಹಣ
ಕೊಟ್ಟು ಕರೆದುಕೊಂಡು ಬಂದರು. ಈ ಕೆಡುಕರು ಅನೇಕ
ಜನರನ್ನು ಒಟ್ಟುಗೂಡಿಸಿ, ಪಟ್ಟಣದಲ್ಲಿ ಗಲಭೆ ಮಾಡಿದರು.
ಜನರು ಪೌಲ ಸೀಲರನ್ನು ಹುಡುಕುತ್ತಾ ಯಾಸೋನನ ಮನೆಗೆ
ಹೋದರು. ಅವರು ಪೌಲ ಸೀಲರನ್ನು ಜನರ ಮುಂದೆ ಹೊರಗೆ
ಎಳೆದುಕೊಂಡು ಬರಬೇಕೆಂದಿದ್ದರು. 6ಆದರೆ ಅವರು ಪೌಲ
ಸೀಲರನ್ನು ಅಲ್ಲಿ ಕಾಣಲಿಲ್ಲ. ಆದ್ದರಿಂದ ಅವರು ಯಾಸೋನ
ನನ್ನೂ ಕೆಲವು ವಿಶ್ವಾಸಿಗಳನ್ನೂ ನಗರಾಧಿಕಾರಿಗಳ ಮುಂದೆ
ಎಳೆದುಕೊಂಡು ಬಂದು, ‘‘ ಈ ಜನರು (ಪೌಲ ಸೀಲರು)
ಪ್ರಪಂಚದ ಎಲ್ಲಾ ಕಡೆಗಳಲ್ಲೂ ಗಲಭೆಯನ್ನು ಉಂಟುಮಾಡಿ
ಈಗ ಇಲ್ಲಿಗೂ ಬಂದಿದ್ದಾರೆ! 7ಯಾಸೋನನು ಇವರನ್ನು ತನ್ನ
ಮನೆಯಲ್ಲಿ ಇರಿಸಿಕೊಂಡಿದ್ದಾನೆ. ಇವರೆಲ್ಲರೂ ಸೀಸರನ
ಕಾನೂನುಗಳನ್ನು ಉಲ್ಲಂಘಿಸುತ್ತಾರೆ ಮತ್ತು ‘ಯೇಸು’ ಎಂಬ
ಮತ್ತೊಬ್ಬ ರಾಜನಿರುವನೆಂದು ಹೇಳುತ್ತಾರೆ’’ ಎಂದು ಕೂಗಿ
ಹೇಳಿದರು.
8ಈ ಸಂಗತಿಗಳನ್ನು ಕೇಳಿದ ನಗರಾಧಿಕಾರಿಗಳು ಮತ್ತು
ಇತರರು ಬಹು ಗಲಿಬಿಲಿಗೊಂಡರು. 9ಅವರು ಯಾಸೋನ
ನಿಂದಲೂ ಇತರ ವಿಶ್ವಾಸಿಗಳಿಂದಲೂ ಜಾಮೀನು ತೆಗೆದು
ಕೊಂಡು ಅವರನ್ನು ಬಿಡುಗಡೆ ಮಾಡಿದರು.

## ಪೌಲ ಸೀಲರ ಪ್ರಯಾಣ

10 ಅದೇ ರಾತ್ರಿಯಲ್ಲಿ ವಿಶ್ವಾಸಿಗಳು ಪೌಲ ಸೀಲರನ್ನು
ಬೆರೋಯ ಎಂಬ ಮತ್ತೊಂದು ಪಟ್ಟಣಕ್ಕೆ ಕಳುಹಿಸಿದರು.
ಬೆರೋಯದಲ್ಲಿ ಪೌಲ ಸೀಲರು ಯೆಹೂದ್ಯರ ಸಭಾಮಂದಿ
ರಕ್ಕೆ ಹೋದರು. 11ಈ ಯೆಹೂದ್ಯರು ಥೆಸಲೋನಿಕದ
ಯೆಹೂದ್ಯರಿಗಿಂತಲೂ ಉತ್ತಮರಾಗಿದ್ದರು. ಪೌಲ ಸೀಲರು
ಹೇಳಿದ ಸಂಗತಿಗಳನ್ನು ಇವರು ಬಹಳ ಸಂತೋಷದಿಂದ
ಕೇಳಿದರು. ಮತ್ತು ಈ ಸಂಗತಿಗಳು ನಿಜವೇ ಎಂಬುದನ್ನು
ತಿಳಿದುಕೊಳ್ಳಲು ಪವಿತ್ರ ಗ್ರಂಥವನ್ನು ಪ್ರತಿದಿನವೂ ಅಧ್ಯಯನ
ಮಾಡಿದರು. 12ಈ ಯೆಹೂದ್ಯರಲ್ಲಿ ಅನೇಕರು ನಂಬಿದರು.
ಅತಿ ಪ್ರಮುಖರಾದ ಗ್ರೀಕ್ ಸ್ತ್ರೀಯರು ಮತ್ತು ಪುರುಷರು
ನಂಬಿಕೊಂಡರು. 13ಆದರೆ ಪೌಲನು ಬೆರೋಯದಲ್ಲಿ ದೇವರ
ವಾಕ್ಯವನ್ನು ಹೇಳುತ್ತಿದ್ದಾನೆ ಎಂಬ ವಾರ್ತೆಯನ್ನು ಕೇಳಿದ
ಥೆಸಲೋನಿಕದ ಯೆಹೂದ್ಯರು ಬೆರೋಯಕ್ಕೂ ಬಂದು
ಅಲ್ಲಿಯ ಜನರನ್ನು ಗಲಿಬಿಲಿಗೊಳಿಸಿ ಗಲಭೆ ಮಾಡಿದರು.
14ಆದ್ದರಿಂದ ವಿಶ್ವಾಸಿಗಳು ಪೌಲನನ್ನು ಸಮುದ್ರ ತೀರಕ್ಕೆ ಆ
ಕೂಡಲೇ ಕಳುಹಿಸಿದರು. ಆದರೆ ಸೀಲ ತಿಮೊಥೆಯರು
ಬೆರೋಯದಲ್ಲಿ ಉಳಿದುಕೊಂಡರು. 15ಪೌಲನೊಂದಿಗೆ
ಹೋದ ವಿಶ್ವಾಸಿಗಳು ಅವನನ್ನು ಅಥೆನ್ಸ್ ಪಟ್ಟಣಕ್ಕೆ ಕರೆದು
ಕೊಂಡು ಹೋದರು. ಈ ಸಹೋದರರು ಪೌಲನ ಒಂದು
ಸಂದೇಶವನ್ನು ಸೀಲ ತಿಮೊಥೆಯರಿಗೆ ತೆಗೆದುಕೊಂಡು
ಹಿಂತಿರುಗಿ ಬಂದರು. ‘‘ನಿಮಗೆ ಸಾಧ್ಯವಾದಷ್ಟು ಬೇಗನೆ ನನ್ನ
ಬಳಿಗೆ ಬನ್ನಿರಿ’’ ಎಂಬುದೇ ಆ ಸಂದೇಶ.

## ಅಥೆನ್ಸಿನಲ್ಲಿ ಪೌಲನು

16ಪೌಲನು ಅಥೆನ್ಸಿನಲ್ಲಿ ಸೀಲ ತಿಮೊಥೆಯರಿಗಾಗಿ ಎದುರು
ನೋಡುತ್ತಿದ್ದನು. ಆ ಪಟ್ಟಣದ ಎಲ್ಲೆಲ್ಲಿಯೂ ವಿಗ್ರಹಗಳಿರು
ವುದನ್ನು ಕಂಡು ಅವನ ಮನಸ್ಸು ನೊಂದುಹೋಯಿತು.
17ಸಭಾಮಂದಿರದಲ್ಲಿ ಪೌಲನು ಯೆಹೂದ್ಯರೊಂದಿಗೆ ಮತ್ತು
ಯೆಹೂದ್ಯರಾಗಿದ್ದ ಗ್ರೀಕರೊಂದಿಗೆ ಚರ್ಚಿಸಿದನು. ಪಟ್ಟಣದ
ವ್ಯಾಪಾರ ಸ್ಥಳದಲ್ಲಿಯೂ ಪೌಲನು ಕೆಲವು ಜನರೊಂದಿಗೆ
ಪ್ರತಿದಿನ ಚರ್ಚಿಸಿದನು. 18ಎಪಿಕೊರಿಯಾ ಮತ್ತು ಸ್ಟೋಯಿಕ
ತತ್ವಶಾಸ್ತ್ರಜ್ಞರಲ್ಲಿ ಕೆಲವರು ಅವನೊಂದಿಗೆ ವಾದಿಸಿದರು.
ಅವರಲ್ಲಿ ಕೆಲವರು, ‘‘ಈ ಮನುಷ್ಯನಿಗೆ ತಾನು ಯಾವುದರ
ಬಗ್ಗೆ ಮಾತಾಡುತ್ತಿದ್ದೇನೆ ಎಂಬುದೇ ನಿಜವಾಗಿಯೂ ತಿಳಿದಿಲ್ಲ.
ಅವನು ಏನು ಹೇಳಲು ಪ್ರಯತ್ನಿಸುತ್ತಿದ್ದಾನೆ?’’ ಎಂದರು.
ಯೇಸುವು ಸತ್ತವರೊಳಗಿಂದ ಜೀವಂತನಾಗಿ ಎದ್ದುಬಂದಿದ್ದಾನೆ
ಎಂಬ ಸುವಾರ್ತೆಯನ್ನು ಪೌಲನು ಅವರಿಗೆ ಹೇಳುತ್ತಿದ್ದನು.
ಆದ್ದರಿಂದ ಅವರು, ‘‘ಕೆಲವು ಬೇರೆ ದೇವರುಗಳ ಬಗ್ಗೆ ಅವನು

ನಮಗೆ ಹೇಳುತ್ತಿರುವಂತೆ ತೋರುತ್ತಿದೆ'' ಎಂದರು. 19ಅವರು
ಪೌಲನನ್ನು ಅರಿಯೊಪಾಗ ನ್ಯಾಯಸಭೆಗೆ ಕರೆದುಕೊಂಡು
ಹೋದರು. ಅವರು ಅವನಿಗೆ, ''ನೀನು ಉಪದೇಶಿಸುತ್ತಿರುವ
ಹೊಸ ತತ್ವವನ್ನು ದಯವಿಟ್ಟು ನಮಗೆ ವಿವರಿಸು. 20ನೀನು
ಹೇಳುತ್ತಿರುವ ಸಂಗತಿಗಳು ನಮಗೆ ಹೊಸದಾಗಿವೆ. ನಾವು
ಹಿಂದೆಂದೂ ಈ ಸಂಗತಿಗಳನ್ನು ಕೇಳಿಲ್ಲ. ಈ ಉಪದೇಶದ ಅರ್ಥ
ವನ್ನು ನಾವು ತಿಳಿದುಕೊಳ್ಳಬಯಸುತ್ತೇವೆ'' ಎಂದು ಹೇಳಿದರು.
21(ಅಥೆನ್ಸಿನ ಎಲ್ಲಾ ಜನರು ಮತ್ತು ಅಲ್ಲಿ ವಾಸವಾಗಿದ್ದ ಬೇರೆ
ದೇಶಗಳವರು ಹೊಸ ಆಲೋಚನೆಗಳ ಬಗ್ಗೆ ಮಾತಾಡು
ವುದಕ್ಕೂ ಕೇಳುವುದಕ್ಕೂ ಬಹಳ ಇಷ್ಟಪಡುತ್ತಿದ್ದರು.)

22ಆಗ ಪೌಲನು ಅರಿಯೊಪಾಗ ನ್ಯಾಯಸಭೆಯ ಮುಂದೆ
ನಿಂತುಕೊಂಡು ಇಂತೆಂದನು: ''ಅಥೆನ್ಸಿನ ಜನರೇ, ನೀವು ಎಲ್ಲಾ
ಸಂಗತಿಗಳಲ್ಲೂ ಬಹು ಧಾರ್ಮಿಕರೆಂದು ನನಗೆ ತೋರುತ್ತದೆ.
23ನಾನು ನಿಮ್ಮ ಪಟ್ಟಣದಲ್ಲಿ ನಡೆದು ಹೋಗುವಾಗ ನೀವು
ಪೂಜಿಸುವ ದೇವತಾ ಪ್ರತಿಮೆಗಳನ್ನು ಕಂಡೆನು. ಒಂದು
ಯಜ್ಞವೇದಿಕೆಯ ಮೇಲೆ, 'ತಿಳಿಯದ ದೇವರಿಗೆ' ಎಂದು ಬರೆ
ದಿತ್ತು. ನಿಮಗೆ ಗೊತ್ತಿಲ್ಲದ ದೇವರನ್ನು ನೀವು ಆರಾಧಿಸು
ತ್ತಿದ್ದೀರಿ. 24ದೇವರ ಬಗ್ಗೆಯೇ ನಾನು ನಿಮಗೆ ಹೇಳುತ್ತಿದ್ದೇನೆ!
ಇಡೀ ಪ್ರಪಂಚವನ್ನು ಮತ್ತು ಅದರಲ್ಲಿರುವ ಪ್ರತಿಯೊಂದನ್ನು
ಸೃಷ್ಟಿಮಾಡಿದಾತನೇ ಆ ದೇವರು. ಆತನೇ ಭೂಮ್ಯಾಕಾಶಗಳ
ಒಡೆಯನು. ಮನುಷ್ಯರು ನಿರ್ಮಿಸುವ ಗುಡಿಗಳಲ್ಲಿ ಆತನು
ಜೀವಿಸುವವನಲ್ಲ. 25ಮನುಷ್ಯರಿಗೆ ಜೀವವನ್ನೂ ಉಸಿರನ್ನೂ
ಸಮಸ್ತವನ್ನೂ ಕೊಡುವಾತನು ಆ ದೇವರೇ. ಆತನಿಗೆ ಜನರ
ಸೇವೆಯ ಅಗತ್ಯವೇನೂ ಇಲ್ಲ. ಆತನಿಗೆ ಕೊರತೆಯೆಂಬುದೂ
ಇಲ್ಲ. 26ದೇವರು ಒಬ್ಬ ಮನುಷ್ಯನನ್ನು ಸೃಷ್ಟಿ ಮಾಡುವುದರ
ಮೂಲಕ ಮಾನವ ಜನಾಂಗವನ್ನು ಆರಂಭಿಸಿದನು. ಅವನಿಂದ
ಬೇರೆಲ್ಲ ಜನರನ್ನು ಉತ್ಪತ್ತಿಮಾಡಿ, ಪ್ರಪಂಚದ ಎಲ್ಲೆಲ್ಲಿಯೂ
ಅವರು ವಾಸಿಸುವಂತೆ ಮಾಡಿದನು; ಅವರು ಯಾವಾಗ ಮತ್ತು
ಎಲ್ಲೆಲ್ಲಿ ವಾಸಿಸಬೇಕೆಂಬುದನ್ನು ಸರಿಯಾಗಿ ನಿರ್ಧರಿಸಿದನು.
27ಜನರು ತನ್ನನ್ನು ಹುಡುಕಬೇಕೆಂಬುದು ದೇವರ ಉದ್ದೇಶ
ವಾಗಿತ್ತು. ತನಗಾಗಿ ಸುತ್ತಮುತ್ತಲೆಲ್ಲಾ ಹುಡುಕಿ ಕಂಡುಕೊಳ್ಳ
ಬಹುದೆಂದು ದೇವರು ಹಾಗೆ ಮಾಡಿದನು. ಆದರೆ ಆತನು
ನಮ್ಮಲ್ಲಿ ಯಾರಿಗೂ ಬಹು ದೂರವಾಗಿಲ್ಲ.

> 28 ನಾವು ಆತನೊಂದಿಗೆ ವಾಸಿಸುತ್ತೇವೆ, ನಡೆಯು
> ತ್ತೇವೆ, ಇರುತ್ತೇವೆ. ನಿಮ್ಮವರೇ ಆದ ಕೆಲವು
> ಲೇಖಕರು, 'ನಾವು ಆತನ ಸಂತಾನದವರೇ'
> ಎಂದು ಹೇಳಿದ್ದಾರೆ.

29ನಾವು ದೇವರ ಮಕ್ಕಳಾಗಿದ್ದೇವೆ. ಆದ್ದರಿಂದ ಜನರು ಊಹಿಸಿ
ಕೊಳ್ಳುವ ರೀತಿಯಲ್ಲಾಗಲಿ ನಿರ್ಮಿಸುವ ರೀತಿಯಲ್ಲಾಗಲಿ
ದೇವರಿದ್ದಾನೆಂದು ನೀವು ಯೋಚಿಸಕೂಡದು. ಆತನು ಬೆಳ್ಳಿ,
ಬಂಗಾರ ಮತ್ತು ಕಲ್ಲುಗಳ ರೂಪದಲ್ಲಿಲ್ಲ. 30ಹಿಂದಿನ ಕಾಲದಲ್ಲಿ
ಜನರು ದೇವರನ್ನು ಅರ್ಥಮಾಡಿಕೊಳ್ಳಲಿಲ್ಲ. ಆದರೆ ದೇವರು
ಅದಕ್ಕೆ ಲಕ್ಷ್ಯಕೊಡಲಿಲ್ಲ. ಈಗಲಾದರೋ ಪ್ರಪಂಚದ ಎಲ್ಲಾ
ಕಡೆಗಳಲ್ಲಿರುವವರು ಪಶ್ಚಾತ್ತಾಪಪಡಬೇಕೆಂದು ಆತನು ಆಜ್ಞಾ
ಪಿಸುತ್ತಾನೆ. 31ಪ್ರಪಂಚದ ಜನರೆಲ್ಲರಿಗೂ ನ್ಯಾಯ ತೀರಿಸು
ವುದಕ್ಕಾಗಿ ದೇವರು ಒಂದು ದಿನವನ್ನು ಗೊತ್ತುಪಡಿಸಿದ್ದಾನೆ.
ಅಂದು ನ್ಯಾಯತೀರಿಸುವುದಕ್ಕಾಗಿ ಆತನು ಒಬ್ಬ ವ್ಯಕ್ತಿಯನ್ನು
ಬಹುಕಾಲದ ಹಿಂದೆಯೇ ಆರಿಸಿಕೊಂಡಿದ್ದಾನೆ. ಇದನ್ನು ಎಲ್ಲ
ರಿಗೂ ಖಚಿತಪಡಿಸುವುದಕ್ಕಾಗಿ ಆ ವ್ಯಕ್ತಿಯನ್ನು ಸತ್ತವರೊಳ
ಗಿಂದ ಜೀವಂತವಾಗಿ ಎಬ್ಬಿಸಿದ್ದಾನೆ.''

32ಯೇಸು ಸತ್ತವರೊಳಗಿಂದ ಜೀವಂತವಾಗಿ ಎದ್ದು
ಬಂದಿದ್ದಾನೆ ಎಂಬ ಸಂಗತಿಯನ್ನು ಕೇಳಿದ ಆ ಜನರಲ್ಲಿ ಕೆಲವರು
ಅಪಹಾಸ್ಯ ಮಾಡಿದರು. ಇತರರು, ''ಈ ವಿಷಯದ ಬಗ್ಗೆ ನೀನು
ಇನ್ನೊಮ್ಮೆ ಹೇಳಬಹುದು, ಆಗ ಕೇಳುತ್ತೇವೆ'' ಎಂದು ಹೇಳಿ
ದರು. ಆದ್ದರಿಂದ ಪೌಲನು ಅವರ ಬಳಿಯಿಂದ ಹೊರಟು
ಹೋದನು. 34ಆದರೆ ಆ ಜನರಲ್ಲಿ ಕೆಲವರು ಪೌಲನನ್ನು ನಂಬಿ
ಅವನನ್ನು ಸೇರಿಕೊಂಡರು. ನಂಬಿದ ಜನರಲ್ಲಿ ಅರಿಯೊಪಾಗ
ನ್ಯಾಯಸಭೆಯ ಸದಸ್ಯನಾದ ದಿಯೊನಿಸಿಯನೂ 'ದಮಾರಿ'
ಎಂಬ ಸ್ತ್ರೀಯೂ ಮತ್ತಿತರರೂ ಇದ್ದರು.

### ಕೊರಿಂಥದಲ್ಲಿ ಪೌಲನು

18 ತರುವಾಯ ಪೌಲನು ಅಥೆನ್ಸನ್ನು ಬಿಟ್ಟು ಕೊರಿಂಥ
ಪಟ್ಟಣಕ್ಕೆ ಹೋದನು. 2ಕೊರಿಂಥದಲ್ಲಿ ಪೌಲನು
ಅಕ್ವಿಲ ಎಂಬ ಯೆಹೂದ್ಯನನ್ನು ಕಂಡನು. ಅಕ್ವಿಲನು ಪೊಂತ
ಎಂಬ ನಾಡಿನವನು. ಆದರೆ ಅಕ್ವಿಲ ಮತ್ತು ಅವನ ಹೆಂಡತಿ
ಪ್ರಿಸ್ಕಿಲ್ಲ ಇಟಲಿಯಿಂದ ಕೊರಿಂಥಕ್ಕೆ ಇತ್ತೀಚೆಗೆ ಬಂದಿದ್ದರು.
ಎಲ್ಲಾ ಯೆಹೂದ್ಯರು ರೋಮನ್ನು ಬಿಟ್ಟುಹೋಗಬೇಕೆಂದು
ಕ್ಲಾಡಿಯಸನು* ಆಜ್ಞಾಪಿಸಿದ್ದರಿಂದ ಅವರು ಇಟಲಿಯನ್ನು
ಬಿಟ್ಟುಬಂದಿದ್ದರು. ಪೌಲನು ಅಕ್ವಿಲ ಮತ್ತು ಪ್ರಿಸ್ಕಿಲ್ಲರನ್ನು
ಭೇಟಿಯಾಗಲು ಹೋದನು. 3ಅವರು ಪೌಲನಂತೆ ಗುಡಾರ
ತಯಾರಕರಾಗಿದ್ದರು. ಪೌಲನು ಅವರಲ್ಲೇ ತಂಗಿದ್ದು, ಅವ
ರೊಂದಿಗೆ ಕೆಲಸ ಮಾಡುತ್ತಿದ್ದನು. 4ಪ್ರತಿ ಸಬ್ಬತ್ ದಿನದಂದು
ಪೌಲನು ಸಭಾಮಂದಿರದಲ್ಲಿ ಯೆಹೂದ್ಯರೊಂದಿಗೂ ಗ್ರೀಕ
ರೊಂದಿಗೂ ಚರ್ಚಿಸುತ್ತಾ ಯೇಸುವಿನಲ್ಲಿ ನಂಬಿಕೆ ಇಡುವಂತೆ
ಅವರನ್ನು ಪ್ರೋತ್ಸಾಹಿಸಿದನು.

5ಕೊರಿಂಥದಲ್ಲಿದ್ದ ಪೌಲನ ಬಳಿಗೆ ಸೀಲ ತಿಮೊಥೆಯರು
ಮಕೆದೋನಿಯದಿಂದ ಬಂದರು. ಅನಂತರ, ಜನರಿಗೆ ಸುವಾರ್ತೆ
ಯನ್ನು ತಿಳಿಸುವುದರಲ್ಲೇ ಪೌಲನು ತನ್ನ ಸಮಯವನ್ನೆಲ್ಲ
ಕಳೆದನು. ಯೇಸುವೇ ಕ್ರಿಸ್ತನೆಂಬುದನ್ನು ಅವನು ಯೆಹೂದ್ಯ
ರಿಗೆ ತೋರಿಸಿಕೊಟ್ಟನು. 6ಆದರೆ ಯೆಹೂದ್ಯರು ಪೌಲನ
ಉಪದೇಶವನ್ನು ತಿರಸ್ಕರಿಸಿ ದೂಷಣೆ ಮಾಡಿದರು. ಆದ್ದರಿಂದ
ಪೌಲನು ತನ್ನ ಬಟ್ಟೆಗಳ ಧೂಳನ್ನು ಝಾಡಿಸಿ ಯೆಹೂದ್ಯರಿಗೆ,
''ನೀವು ರಕ್ಷಣೆ ಹೊಂದದಿದ್ದರೆ, ಅದು ನಿಮ್ಮ ಸ್ವಂತ ತಪ್ಪು.
ನನ್ನಿಂದ ಸಾಧ್ಯವಾದದ್ದನ್ನೆಲ್ಲ ನಾನು ಮಾಡಿದ್ದೇನೆ. ಇನ್ನು ಮೇಲೆ
ನಾನು ಯೆಹೂದ್ಯರಲ್ಲದ ಜನರ ಬಳಿಗೆ ಹೋಗುತ್ತೇನೆ!''
ಎಂದು ಹೇಳಿದನು. 7ಪೌಲನು ಸಭಾಮಂದಿರವನ್ನು ಬಿಟ್ಟು
ತೀತಯುಸ್ತ ಎಂಬವನ ಮನೆಗೆ ಹೋದನು. ಈ ಮನುಷ್ಯನು
ನಿಜದೇವರನ್ನು ಆರಾಧಿಸುತ್ತಿದ್ದನು. ಇವನ ಮನೆ ಸಭಾ
ಮಂದಿರದ ಪಕ್ಕದಲ್ಲಿತ್ತು. 8ಕ್ರಿಸ್ಪನು ಸಭಾಮಂದಿರದ ಅಧ್ಯಕ್ಷ
ನಾಗಿದ್ದನು. ಕ್ರಿಸ್ಪನು ಮತ್ತು ಅವನ ಮನೆಯಲ್ಲಿ ವಾಸವಾಗಿದ್ದ
ಎಲ್ಲಾ ಜನರು ಪ್ರಭುವಿನಲ್ಲಿ ನಂಬಿಕೆಯಿಟ್ಟರು. ಕೊರಿಂಥದಲ್ಲಿ

---

**ಕ್ಲಾಡಿಯಸ್** ರೋಮ್ ಚಕ್ರವರ್ತಿ.

ಇತರ ಅನೇಕ ಜನರು ಪೌಲನಿಗೆ ಕಿವಿಗೊಟ್ಟರು ಮತ್ತು ನಂಬಿ ದೀಕ್ಷಾಸ್ನಾನ ಮಾಡಿಸಿಕೊಂಡರು.

9ಒಂದು ರಾತ್ರಿ ಪೌಲನಿಗೆ ದರ್ಶನವಾಯಿತು. ಪ್ರಭುವು ಅವನಿಗೆ, ‘‘ಭಯಪಡಬೇಡ! ಜನರಿಗೆ ಬೋಧಿಸುತ್ತಲೇ ಇರು, ನಿಲ್ಲಿಸಬೇಡ! 10ನಾನು ನಿನ್ನೊಂದಿಗಿದ್ದೇನೆ. ನಿನಗೆ ಕೇಡು ಮಾಡಲು ಯಾರಿಗೂ ಸಾಧ್ಯವಿಲ್ಲ. ನನ್ನ ಅನೇಕ ಜನರು ಈ ಪಟ್ಟಣದಲ್ಲಿ ಇದ್ದಾರೆ’’ ಎಂದು ಹೇಳಿದನು. 11ಪೌಲನು ದೇವರ ಸತ್ಯವನ್ನು ಜನರಿಗೆ ಉಪದೇಶಿಸುತ್ತಾ ಅಲ್ಲಿ ಒಂದೂವರೆ ವರ್ಷದವರೆಗೆ ಇದ್ದನು.

### ಗಲ್ಲಿಯೋನನ ಮುಂದೆ ಪೌಲ

12ಅಖಾಯ ನಾಡಿಗೆ ಗಲ್ಲಿಯೋನನು ರಾಜ್ಯಪಾಲನಾದಾಗ ಕೆಲವು ಯೆಹೂದ್ಯರು ಪೌಲನಿಗೆ ವಿರೋಧವಾಗಿ ಸೇರಿ ಬಂದರು. ಅವರು ಪೌಲನನ್ನು ನ್ಯಾಯಾಲಯಕ್ಕೆ ಕರೆದೊಯ್ದು, 13ರಾಜ್ಯಪಾಲನಿಗೆ, ‘‘ನಮ್ಮ ಧರ್ಮಶಾಸ್ತ್ರಕ್ಕೆ ವಿರುದ್ಧವಾದ ರೀತಿಯಲ್ಲಿ ದೇವರನ್ನು ಆರಾಧಿಸಬೇಕೆಂದು ಇವನು ಜನರಿಗೆ ಉಪದೇಶಿಸುತ್ತಿದ್ದಾನೆ!’’ ಎಂದು ಹೇಳಿದರು.

14ಪೌಲನು ಮಾತಾಡುವುದಕ್ಕೆ ಸಿದ್ಧನಾಗಿದ್ದನು. ಆದರೆ ಗಲ್ಲಿಯೋನ ಯೆಹೂದ್ಯರಿಗೆ, ‘‘ಯೆಹೂದ್ಯರೇ, ಅಪರಾಧವಾಗಲಿ ದುಷ್ಕಾರ್ಯವಾಗಲಿ ನಡೆದಿದ್ದರೆ ನಾನು ನಿಮ್ಮ ದೂರು ಕೇಳುತ್ತಿದ್ದೆನು. 15ನಿಮ್ಮ ಅಪವಾದಗಳು ಕೇವಲ ಪದಗಳಿಗೂ ಹೆಸರುಗಳಿಗೂ ಮತ್ತು ನಿಮ್ಮ ಸ್ವಂತ ಧರ್ಮಶಾಸ್ತ್ರಕ್ಕೂ ಸಂಬಂಧಪಟ್ಟಿವೆ. ಆದ್ದರಿಂದ ನೀವೇ ಈ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು. ಈ ಸಂಗತಿಗಳಿಗೆ ನ್ಯಾಯಾಧೀಶನಾಗಿರಲು ನನಗೆ ಇಷ್ಟವಿಲ್ಲ!’’ ಎಂದು ಹೇಳಿ, 16ಅವರನ್ನು ನ್ಯಾಯಾಲಯದಿಂದ ಹೊರಡಿಸಿದನು.

17ಬಳಿಕ ಅವರೆಲ್ಲರೂ ಸೋಸ್ಥೆನನನ್ನು ಹಿಡಿದುಕೊಂಡು ನ್ಯಾಯಾಲಯದ ಮುಂದೆಯೇ ಹೊಡೆದರು. (ಸೋಸ್ಥೆನನು ಆಗ ಸಭಾಮಂದಿರದ ಅಧ್ಯಕ್ಷನಾಗಿದ್ದನು.) ಆದರೆ ಗಲ್ಲಿಯೋನ ಅದನ್ನು ತನ್ನ ಗಮನಕ್ಕೆ ತೆಗೆದುಕೊಳ್ಳಲಿಲ್ಲ.

### ಅಂತಿಯೋಕ್ಯಕ್ಕೆ ಪೌಲನ ಮರುಪ್ರಯಾಣ

18 ಪೌಲನು ಅನೇಕ ದಿನಗಳವರೆಗೆ ಸಹೋದರರೊಂದಿಗೆ ಇದ್ದನು. ಬಳಿಕ ಅವನು ಅಲ್ಲಿಂದ ಸಿರಿಯಕ್ಕೆ ನೌಕಾಯಾನ ಮಾಡಿದನು. ಪ್ರಿಸ್ಕಿಲ್ಲ ಮತ್ತು ಅಕ್ವಿಲ್ಲ ಸಹ ಅವನೊಂದಿಗಿದ್ದರು. ಕೆಂಖ್ರೆ ಎಂಬ ಸ್ಥಳದಲ್ಲಿ ಪೌಲನು ತನ್ನ ತಲೆಕೂದಲನ್ನು ಕತ್ತರಿಸಿಕೊಂಡನು. ಅವನು ದೇವರಿಗೆ ಹರಕೆಯನ್ನು ಮಾಡಿಕೊಂಡಿದ್ದನೆಂಬುದನ್ನು ಅದು ಸೂಚಿಸುತ್ತಿತ್ತು. 19ಬಳಿಕ ಅವರು ಎಫೆಸ ಪಟ್ಟಣಕ್ಕೆ ಹೋದರು. ಪ್ರಿಸ್ಕಿಲ್ಲ ಮತ್ತು ಅಕ್ವಿಲರನ್ನು ಪೌಲನು ಬಿಟ್ಟುಹೋದದ್ದು ಇಲ್ಲಿಯೇ. ಪೌಲನು ಎಫೆಸದಲ್ಲಿದ್ದಾಗ ಸಭಾಮಂದಿರಕ್ಕೆ ಹೋಗಿ ಯೆಹೂದ್ಯರೊಂದಿಗೆ ಚರ್ಚಿಸಿದನು. 20ಆ ಯೆಹೂದ್ಯರು ಇನ್ನೂ ಸ್ವಲ್ಪಕಾಲ ಇರಬೇಕೆಂದು ಪೌಲನನ್ನು ಕೇಳಿಕೊಂಡರು. ಆದರೆ ಅವನು ಒಪ್ಪಲಿಲ್ಲ. 21ಪೌಲನು ಅವರಿಗೆ, ‘‘ದೇವರು ಬಯಸುವುದಾದರೆ, ನಾನು ನಿಮ್ಮ ಬಳಿಗೆ ಮತ್ತೆ ಬರುತ್ತೇನೆ’’ ಎಂದು ಹೇಳಿ ಅಲ್ಲಿಂದ ಹೊರಟನು. ಹೀಗೆ ಪೌಲನು ಎಫೆಸದಿಂದ ನೌಕಾಯಾನ ಮಾಡಿದನು.

22ಪೌಲನು ಸೆಜರೇಯ ಪಟ್ಟಣಕ್ಕೆ ಹೋದನು. ಅಲ್ಲಿಂದ ಜೆರುಸಲೇಮಿಗೆ ಹೋಗಿ ಸಭೆಯವರನ್ನು ವಂದಿಸಿದನು. ಅನಂತರ ಪೌಲನು ಅಂತಿಯೋಕ್ಯ ಪಟ್ಟಣಕ್ಕೆ ಹೋದನು. 23ಅಲ್ಲಿ ಅವನು ಸ್ವಲ್ಪಕಾಲವಿದ್ದನು. ಬಳಿಕ ಅಲ್ಲಿಂದ ಹೊರಟು ಗಲಾತ್ಯ ಮತ್ತು ಫ್ರಿಜಿಯ ನಾಡುಗಳಲ್ಲಿ ಸಂಚರಿಸುತ್ತಾ ಯೇಸುವಿನ ಶಿಷ್ಯರೆಲ್ಲರನ್ನು ಬಲಪಡಿಸಿದನು.

### ಎಫೆಸದಲ್ಲಿ ಮತ್ತು ಅಖಾಯದಲ್ಲಿ ಅಪೊಲ್ಲೋಸನು

24 ಅಲೆಕ್ಸಾಂಡ್ರಿಯಾ ಪಟ್ಟಣದಿಂದ ಅಪೊಲ್ಲೋಸನೆಂಬ ಯೆಹೂದ್ಯನು ಎಫೆಸಕ್ಕೆ ಬಂದನು .ಅವನು ವಿದ್ಯಾವಂತನಾಗಿದ್ದನು ಮತ್ತು ಪವಿತ್ರ ಗ್ರಂಥದಲ್ಲಿ ಪಾಂಡಿತ್ಯ ಪಡೆದಿದ್ದನು. 25ಅಪೊಲ್ಲೋಸನು ಯಾವಾಗಲೂ ಬಹು ಉತ್ಸುಕತೆಯಿಂದ ಯೇಸುವಿನ ಬಗ್ಗೆ ಜನರಿಗೆ ಉಪದೇಶಿಸುತ್ತಿದ್ದನು. ಯೇಸುವಿನ ಬಗ್ಗೆ ಅಪೊಲ್ಲೋಸನು ಹೇಳಿದ ಸಂಗತಿಗಳು ಸರಿಯಾಗಿದ್ದವು. ಆದರೆ ಸ್ನಾನಿಕ ಯೋಹಾನನ ದೀಕ್ಷಾಸ್ನಾನವೊಂದೇ ಇವನಿಗೆ ಗೊತ್ತಿತ್ತು. 26ಅಪೊಲ್ಲೋಸನು ಸಭಾಮಂದಿರದಲ್ಲಿ ಬಹು ಧೈರ್ಯವಾಗಿ ಮಾಡಿದ ಉಪದೇಶವನ್ನು ಕೇಳಿದ ಪ್ರಿಸ್ಕಿಲ್ಲ ಮತ್ತು ಅಕ್ವಿಲ ಅವನನ್ನು ತಮ್ಮ ಮನೆಗೆ ಕರೆದುಕೊಂಡು ಹೋಗಿ, ದೇವರ ಮಾರ್ಗವನ್ನು ಆಳವಾಗಿ ಗ್ರಹಿಸಿಕೊಳ್ಳಲು ನೆರವು ನೀಡಿದರು.27ಅಪೊಲ್ಲೋಸನು ಅಖಾಯ ಪ್ರಾಂತ್ಯಕ್ಕೆ ಹೋಗಲು ಅಪೇಕ್ಷಿಸಿದಾಗ ಎಫೆಸದ ಸಹೋದರರು ಅವನನ್ನು ಪ್ರೋತ್ಸಾಹಿಸಿದರು. ಅಲ್ಲದೆ ಅಖಾಯದಲ್ಲಿದ್ದ ಯೇಸುವಿನ ಶಿಷ್ಯರಿಗೆ ಅವರು ಪತ್ರವನ್ನು ಬರೆದು, ಅಪೊಲ್ಲೋಸನನ್ನು ಸ್ವೀಕರಿಸಿಕೊಳ್ಳಬೇಕೆಂದು ಅವರನ್ನು ಕೇಳಿಕೊಂಡರು. ಅಖಾಯದಲ್ಲಿ ಈ ಶಿಷ್ಯರು ದೇವರ ಕೃಪೆಯಿಂದಾಗಿ ಯೇಸುವಿನಲ್ಲಿ ನಂಬಿಕೆಯಿಟ್ಟಿದ್ದರು. ಅಪೊಲ್ಲೋಸನು ಅಲ್ಲಿಗೆ ಹೋಗಿ ಅವರಿಗೆ ಬಹಳ ನೆರವು ನೀಡಿದನು. 28ಅವನು ಜನರೆಲ್ಲರ ಮುಂದೆ ಯೆಹೂದ್ಯರ ವಿರುದ್ಧ ಬಹು ಬಲವಾಗಿ ವಾದಿಸಿ, ಪವಿತ್ರ ಗ್ರಂಥವನ್ನು ಆಧಾರವಾಗಿ ತೆಗೆದುಕೊಂಡು ಯೇಸುವೇ ಕ್ರಿಸ್ತನೆಂಬುದನ್ನು ಸ್ಪಷ್ಟವಾಗಿ ನಿರೂಪಿಸಿದನು.

### ಪೌಲ ಎಫೆಸದಲ್ಲಿ

19 ಅಪೊಲ್ಲೋಸನು ಕೊರಿಂಥ ಪಟ್ಟಣದಲ್ಲಿದ್ದಾಗ ಪೌಲನು ಎಫೆಸ ಪಟ್ಟಣಕ್ಕೆ ಪ್ರಯಾಣ ಮಾಡುತ್ತಾ ದಾರಿಯಲ್ಲಿ ಸಿಕ್ಕಿದ ಕೆಲವು ಊರುಗಳನ್ನು ಸಂದರ್ಶಿಸಿದನು. ಅವನು ಎಫೆಸ ಪಟ್ಟಣವನ್ನು ತಲುಪಿದಾಗ, ಕೆಲವು ಮಂದಿ ಶಿಷ್ಯರನ್ನು ಕಂಡು, 2 ‘‘ನೀವು ನಂಬಿಕೊಂಡಾಗ ಪವಿತ್ರಾತ್ಮನನ್ನು ಹೊಂದಿಕೊಂಡಿರಾ?’’ ಎಂದು ಕೇಳಿದನು. ಆ ಶಿಷ್ಯರು ಅವನಿಗೆ, ‘‘ಪವಿತ್ರಾತ್ಮನು ಇದ್ದಾನೆ ಎಂಬುದನ್ನು ನಾವು ಇದುವರೆಗೆ ಕೇಳಿಯೂ ಇಲ್ಲ!’’ ಎಂದರು.

3ಪೌಲನು ಅವರಿಗೆ, ‘‘ನೀವು ಯಾವ ಬಗೆಯ ದೀಕ್ಷಾಸ್ನಾನ ಪಡೆದಿರಿ?’’ ಎಂದು ಕೇಳಿದನು. ಅವರು, ‘‘ಯೋಹಾನನು ಬೋಧಿಸಿದ ದೀಕ್ಷಾಸ್ನಾನವನ್ನು ನಾವು ಮಾಡಿಸಿಕೊಂಡೆವು’’ ಎಂದು ಹೇಳಿದರು.

4ಅದಕ್ಕೆ ಪೌಲನು, ‘‘ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಂಡವರಿಗೆ ಯೋಹಾನನು ದೀಕ್ಷಾಸ್ನಾನ ಮಾಡಿಸಿದನು. ಅಲ್ಲದೆ ತನ್ನ ತರುವಾಯ

ಬರುವಾತನಲ್ಲಿ ನಂಬಿಕೆ ಇಡಬೇಕೆಂದು ಅವರಿಗೆ ಹೇಳಿದನು.
ಆ ವ್ಯಕ್ತಿಯೇ ಯೇಸು'' ಎಂದನು.
5ಇದನ್ನು ಕೇಳಿದಾಗ ಆ ಶಿಷ್ಯರು ಪ್ರಭುವಾದ ಯೇಸುವಿನ
ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಂಡರು. 6ಬಳಿಕ ಪೌಲನು
ಅವರ ಮೇಲೆ ತನ್ನ ಕೈಗಳನ್ನಿಟ್ಟಾಗ ಅವರು ಪವಿತ್ರಾತ್ಮಭರಿತ
ರಾದರು. ಅವರು ವಿವಿಧ ಭಾಷೆಗಳಲ್ಲಿ ಮಾತಾಡಿದರು ಮತ್ತು
ಪ್ರವಾದನೆ ಮಾಡಿದರು. 7ಈ ಗುಂಪಿನಲ್ಲಿ ಸುಮಾರು ಹನ್ನೆರಡು
ಮಂದಿ ಇದ್ದರು.
8ಅನಂತರ ಮೂರು ತಿಂಗಳ ಕಾಲ ಪೌಲನು ಸಭಾ
ಮಂದಿರಕ್ಕೆ ಹೋಗಿ ಬಹು ಧೈರ್ಯದಿಂದ ಮಾತಾಡಿದನು.
ಅವನು ಯೆಹೂದ್ಯರಿಗೆ ದೇವರ ರಾಜ್ಯದ ಸಂಗತಿಗಳನ್ನು ತಿಳಿಸಿ
ಅವರನ್ನು ಒಡಂಬಡಿಸಲು ಪ್ರಯತ್ನಿಸಿದನು.
9ಆದರೆ ಆ ಯೆಹೂದ್ಯರಲ್ಲಿ ಕೆಲವರು ಮೊಂಡರಾದರು.
ಅವರು ನಂಬದೆ ದೇವರ ಮಾರ್ಗವನ್ನು ಜನರೆಲ್ಲರ ಎದುರಿನಲ್ಲಿ
ದೂಷಿಸಿದರು. ಆದ್ದರಿಂದ ಪೌಲನು ಏಷ್ಯಾ ಪ್ರಾಂತ್ಯದ ಆ
ಯೆಹೂದ್ಯರನ್ನೆಲ್ಲ ಬಿಟ್ಟು, ಯೇಸುವಿನ ಶಿಷ್ಯರನ್ನು ತನ್ನೊಂದಿಗೆ
ಕರೆದುಕೊಂಡು ಹೋಗಿ, ತುರನ್ನನ ಶಾಲೆಯಲ್ಲಿ ಪ್ರತಿದಿನವೂ
ಚರ್ಚೆ ನಡೆಸಿದನು. 10ಹೀಗೆ ಎರಡು ವರ್ಷಗಳು ಕಳೆದವು. ಇದ
ರಿಂದಾಗಿ, ಏಷ್ಯಾದಲ್ಲಿ ವಾಸವಾಗಿದ್ದ ಎಲ್ಲಾ ಯೆಹೂದ್ಯರು
ಮತ್ತು ಗ್ರೀಕರು ಪ್ರಭುವಿನ ವಾಕ್ಯವನ್ನು ಕೇಳಿದರು.

## ಸ್ಕೇವನ ಗಂಡುಮಕ್ಕಳು

11ದೇವರು ಪೌಲನ ಕೈಯಿಂದ ಬಹು ವಿಶೇಷವಾದ ಮಹ
ತ್ಕಾರ್ಯಗಳನ್ನು ಮಾಡಿಸುತ್ತಿದ್ದನು. 12ಪೌಲನ ಕರವಸ್ತ್ರಗಳನ್ನು
ಮತ್ತು ಬಟ್ಟೆಗಳನ್ನು ಕೆಲವರು ತೆಗೆದುಕೊಂಡು ಹೋಗಿ ರೋಗಿ
ಗಳ ಮೇಲೆ ಹಾಕುತ್ತಿದ್ದರು. ಆ ಕೂಡಲೇ ರೋಗಿಗಳು ಗುಣ
ಹೊಂದುತ್ತಿದ್ದರು; ದೆವ್ವಗಳಿಂದ ಪೀಡಿತರಾಗಿದ್ದವರನ್ನು ದೆವ್ವ
ಗಳು ಬಿಟ್ಟುಹೋಗುತ್ತಿದ್ದವು.
13-14ಕೆಲವು ಯೆಹೂದ್ಯರು ಸಹ ಊರೂರುಗಳಿಗೆ
ಸಂಚರಿಸುತ್ತಾ ದೆವ್ವದಿಂದ ಪೀಡಿತರಾಗಿದ್ದ ಜನರೊಳಗಿಂದ
ದೆವ್ವಗಳನ್ನು ಯೇಸುವಿನ ಹೆಸರಿನ ಮೂಲಕ ಹೊರಡಿಸು
ತ್ತಿದ್ದರು. ಸ್ಕೇವ ಎಂಬವನ ಏಳು ಮಂದಿ ಗಂಡು ಮಕ್ಕಳೂ ಹೀಗೇ
ಮಾಡುತ್ತಿದ್ದರು.(ಸ್ಕೇವನು ಪ್ರಧಾನಯಾಜಕನಾಗಿದ್ದನು.) ಅವ
ರೆಲ್ಲರೂ, ''ಪೌಲನು ಯಾವ ಯೇಸುವಿನ ಬಗ್ಗೆ ಹೇಳು
ತ್ತಿದ್ದಾನೋ ಆ ಯೇಸುವಿನ ಹೆಸರಿನಿಂದಲೇ, ನೀನು ಹೊರಗೆ
ಬರಬೇಕೆಂದು ನಾವು ಆಜ್ಞಾಪಿಸುತ್ತೇವೆ'' ಎಂದು ಹೇಳು
ತ್ತಿದ್ದರು.
15ಆದರೆ ಒಂದು ಸಲ ದೆವ್ವವೊಂದು ಅವರಿಗೆ, ''ನನಗೆ
ಯೇಸುವೂ ಗೊತ್ತು ಪೌಲನೂ ಗೊತ್ತು, ಆದರೆ ನೀವು
ಯಾರು?'' ಎಂದು ಪ್ರತ್ಯುತ್ತರ ಕೊಟ್ಟಿತು.
16ಬಳಿಕ ದೆವ್ವಪೀಡಿತನಾಗಿದ್ದ ಆ ಮನುಷ್ಯನು ಈ
ಯೆಹೂದ್ಯರ ಮೇಲೆ ಹಾರಿಬಿದ್ದನು. ಅವನು ಅವರಿಗಿಂತ ಹೆಚ್ಚು
ಬಲವುಳ್ಳವನಾಗಿದ್ದನು. ಅವನು ಅವರಿಗೆ ಹೊಡೆದು ಅವರ ಬಟ್ಟೆ
ಗಳನ್ನು ಹರಿದು ಹಾಕಿದನು. ಈ ಯೆಹೂದ್ಯರು ಆ ಮನೆಯಿಂದ
ಓಡಿಹೋದರು. 17ಎಫೆಸದಲ್ಲಿದ್ದ ಯೆಹೂದ್ಯರು ಮತ್ತು
ಗ್ರೀಕರು ಇದನ್ನು ಕೇಳಿ ಭಯಗ್ರಸ್ತರಾದರು ಮತ್ತು ಪ್ರಭು
ಯೇಸುವಿನ ಹೆಸರನ್ನು ಸನ್ಮಾನಿಸಿದರು. 18ವಿಶ್ವಾಸಿಗಳಲ್ಲಿ
ಅನೇಕರು ತಾವು ಮಾಡಿದ ಪಾಪಗಳನ್ನು ಒಪ್ಪಿಕೊಂಡು ಅರಿಕೆ
ಮಾಡತೊಡಗಿದರು. 19ವಿಶ್ವಾಸಿಗಳಲ್ಲಿ ಕೆಲವರು ಮಂತ್ರಗಳನ್ನು
ಮಾಡುತ್ತಿದ್ದರು. ಈ ವಿಶ್ವಾಸಿಗಳು ತಮ್ಮ ಮಂತ್ರ ಪುಸ್ತಕಗಳನ್ನು
ತೆಗೆದುಕೊಂಡು ಬಂದು ಜನರೆಲ್ಲರ ಮುಂದೆ ಅವುಗಳನ್ನು
ಸುಟ್ಟುಹಾಕಿದರು. ಈ ಪುಸ್ತಕಗಳ ಬೆಲೆಯು ಸುಮಾರು ಐವತ್ತು
ಸಾವಿರ ಬೆಳ್ಳಿ ನಾಣ್ಯಗಳು.* 20ಹೀಗೆ ಪ್ರಭುವಿನ ವಾಕ್ಯವು ಶಕ್ತಿ
ಯುತವಾದ ರೀತಿಯಲ್ಲಿ ಹೆಚ್ಚುಹೆಚ್ಚು ಜನರ ಮೇಲೆ ಪ್ರಭಾವ
ಬೀರುತ್ತಿತ್ತು. ಇದರಿಂದಾಗಿ ಹೆಚ್ಚುಹೆಚ್ಚು ಜನರು ನಂಬಿ
ಕೊಂಡರು.

## ಪ್ರಯಾಣಕ್ಕೆ ಪೌಲನ ಯೋಜನೆ

21ಈ ಘಟನೆಗಳ ನಂತರ ಪೌಲನು ಮಕೆದೋನಿಯ ಮತ್ತು
ಅಖಾಯ ದೇಶಗಳ ಮೂಲಕ ಜೆರುಸಲೇಮಿಗೆ ಹೋಗಲು
ಯೋಜನೆ ಮಾಡಿದನು. ''ನಾನು ಜೆರುಸಲೇಮನ್ನು ಸಂದರ್ಶಿ
ಸಿದ ಮೇಲೆ ರೋಮ್‌ನಗರವನ್ನು ಸಹ ಸಂದರ್ಶಿಸಬೇಕು''
ಎಂದು ಪೌಲನು ಯೋಚಿಸಿಕೊಂಡನು. 22ತಿಮೊಥೆ ಮತ್ತು
ಎರಸ್ತ ಎಂಬವರು ಪೌಲನ ಸಹಾಯಕರಾಗಿದ್ದರು. ಪೌಲನು
ಅವರನ್ನು ಮಕೆದೋನಿಯ ದೇಶಕ್ಕೆ ಮುಂಚಿತವಾಗಿಯೇ ಕಳು
ಹಿಸಿದನು. ಪೌಲನು ಇನ್ನೂ ಸ್ವಲ್ಪಕಾಲ ಏಷ್ಯಾದಲ್ಲಿ ತಂಗಿದನು.

## ಎಫೆಸದಲ್ಲಿ ಗಲಭೆ

23ಆದರೆ ಆ ಸಮಯದಲ್ಲಿ ದೇವರ ಮಾರ್ಗದ ಬಗ್ಗೆ ತೀವ್ರ
ಗಲಭೆಯೊಂದು ಎಫೆಸದಲ್ಲಿ ಉಂಟಾಯಿತು. ಅದು ನಡೆದ ರೀತಿ
ಇಂತಿದೆ: 24ಅಲ್ಲಿ ದೇಮೇತ್ರಿಯನೆಂಬ ಒಬ್ಬ ವ್ಯಕ್ತಿಯಿದ್ದನು.
ಅವನು ಅಕ್ಕಸಾಲಿಗನಾಗಿದ್ದನು. ಅರ್ತೆಮಿ* ದೇವತೆಯ ಗುಡಿ
ಯಾಕಾರದಲ್ಲಿ ಬೆಳ್ಳಿಯಿಂದ ಚಿಕ್ಕಚಿಕ್ಕ ಗುಡಿಗಳನ್ನು ಅವನು
ತಯಾರಿಸುತ್ತಿದ್ದನು. ಈ ಕಸುಬನ್ನು ಮಾಡುತ್ತಿದ್ದ ಜನರು ಬಹಳ
ವಾಗಿ ಹಣ ಸಂಪಾದಿಸಿದರು. 25ದೇಮೇತ್ರಿಯನು ಈ ಜನರನ್ನು
ಮತ್ತು ಇದೇ ರೀತಿಯ ಕಸುಬನ್ನು ಮಾಡುತ್ತಿದ್ದ ಇತರ ಜನರನ್ನು
ಸಭೆಸೇರಿಸಿ ಅವರಿಗೆ, ''ಜನರೇ, ನಮ್ಮ ಈ ಕಸುಬಿನಿಂದ ನಾವು
ಬಹಳ ಹಣವನ್ನು ಗಳಿಸುತ್ತಿದ್ದೇವೆ ಎಂಬುದು ನಿಮಗೆ ಗೊತ್ತೇ
ಇದೆ. 26ಆದರೆ ಪೌಲ ಎಂಬವನು ಏನು ಮಾಡುತ್ತಿದ್ದಾನೆಂಬು
ದನ್ನು ನೋಡಿರಿ! ಅವನು ಏನು ಹೇಳುತ್ತಿದ್ದಾನೆಂಬುದನ್ನು
ಕೇಳಿರಿ! ಪೌಲನು ಅನೇಕ ಜನರ ಮೇಲೆ ಪ್ರಭಾವ ಬೀರಿ
ಅವರನ್ನು ಪರಿವರ್ತಿಸಿದ್ದಾನೆ. ಅವನು ಎಫೆಸದಲ್ಲಿಯೂ ಏಷ್ಯಾ
ದೇಶದ ಎಲ್ಲಾ ಕಡೆಗಳಲ್ಲಿಯೂ ಹೀಗೆಯೇ ಮಾಡಿದ್ದಾನೆ.
ಮನುಷ್ಯರು ತಯಾರಿಸುವ ದೇವರುಗಳು ನಿಜವಾದ ದೇವರು
ಗಳಲ್ಲ ಎಂದು ಹೇಳುತ್ತಿದ್ದಾನೆ. 27ಇದರಿಂದಾಗಿ ಜನರು ನಮ್ಮ
ಕೆಲಸದ ವಿರುದ್ಧ ರೊಚ್ಚಿಗೇಳಬಹುದು. ಅಷ್ಟೇ ಅಲ್ಲ, ಮಹಾ
ದೇವತೆಯಾದ ಅರ್ತೆಮಿಯ ಗುಡಿಯನ್ನು ಜನರು ಕಡೆಗಣಿಸುವ
ಸಾಧ್ಯತೆಯೂ ಇದೆ. ಆಗ, ಏಷ್ಯಾದಲ್ಲಿ ಮತ್ತು ಇಡೀ ಪ್ರಪಂಚ
ದಲ್ಲಿ ಪೂಜಿಸಲ್ಪಡುತ್ತಿರುವ ಅರ್ತೆಮಿಯ ದೇವತೆಯ ವೈಭವ
ಅಳಿದು ಹೋಗುವುದು'' ಎಂದನು.

---

**ಐವತ್ತು ಸಾವಿರ ಬೆಳ್ಳಿ ನಾಣ್ಯಗಳು** ಒಂದು ಬೆಳ್ಳಿ ನಾಣ್ಯವು ಒಬ್ಬ ಗಂಡಾಳಿನ ಒಂದು ದಿನದ ಕೂಲಿಯಾಗಿತ್ತು.

**ಅರ್ತೆಮಿ** ಗ್ರೀಕ್‌ರ ದೇವತೆ. ಏಷ್ಯಾ ಮೈನರ್‌ನ ಜನರು ಈಕೆಯನ್ನು ಆರಾಧಿಸುತ್ತಿದ್ದರು.

28ಈ ಮಾತುಗಳನ್ನು ಕೇಳಿದ ಜನರು ಬಹು ಕೋಪ
ಗೊಂಡು, ‘‘ಎಫೆಸದ ಅರ್ತೆಮಿದೇವಿಯೇ ಮಹಾದೇವಿ!’’
ಎಂದು ಕೂಗಿದರು. 29ಪಟ್ಟಣದಲ್ಲಿದ್ದ ಜನರೆಲ್ಲಾ ಗಲಿಬಿಲಿ
ಗೊಂಡರು. ಜನರು ಗಾಯ ಮತ್ತು ಅರಿಸ್ತಾರ್ಕ ಎಂಬವರನ್ನು
ಹಿಡಿದುಕೊಂಡರು.(ಇವರಿಬ್ಬರು ಮಕೆದೋನಿಯದವರು
ಮತ್ತು ಪೌಲನೊಂದಿಗೆ ಪ್ರಯಾಣ ಮಾಡುತ್ತಿದ್ದವರು.) ಬಳಿಕ
ಜನರೆಲ್ಲರು ಕ್ರೀಡಾಂಗಣಕ್ಕೆ ಓಡಿಹೋದರು. 30ಇದನ್ನು ತಿಳಿದ
ಪೌಲನು ಒಳಗೆ ಹೋಗಿ ಜನರೊಂದಿಗೆ ಮಾತಾಡ
ಬೇಕೆಂದಿದ್ದನು. ಆದರೆ ಯೇಸುವಿನ ಶಿಷ್ಯರು ಅವನನ್ನು ಹೋಗ
ಗೊಡಿಸಲಿಲ್ಲ. 31ಅಲ್ಲದೆ, ಪೌಲನ ಸ್ನೇಹಿತರಾಗಿದ್ದ ಈ ದೇಶದ
ನಾಯಕರುಗಳಲ್ಲಿ ಕೆಲವರು ಅವನಿಗೆ ಒಂದು ಸಂದೇಶವನ್ನು
ಕಳುಹಿಸಿ ಕ್ರೀಡಾಂಗಣದೊಳಗೆ ಹೋಗಬಾರದೆಂದು ತಿಳಿಸಿ
ದರು. 32ಕೆಲವು ಜನರು ಒಂದು ವಿಷಯದ ಬಗ್ಗೆ ಬೊಬ್ಬೆ
ಹಾಕುತ್ತಿದ್ದರೆ, ಉಳಿದ ಜನರು ಬೇರೆ ವಿಷಯಗಳ ಬಗ್ಗೆ
ಕೂಗಾಡುತ್ತಿದ್ದರು. ಸಭೆಯು ಬಹಳ ಗಲಿಬಿಲಿಗೊಳಗಾಯಿತು.
ತಾವು ಅಲ್ಲಿಗೆ ಯಾಕೆ ಬಂದಿದ್ದೇವೆ ಎಂಬುದೇ ಅನೇಕ ಜನರಿಗೆ
ತಿಳಿದಿರಲಿಲ್ಲ. 33ಯೆಹೂದ್ಯರು ಅಲೆಕ್ಸಾಂಡರ್ ಎಂಬವನನ್ನು
ಜನರ ಮುಂದೆ ನೂಕಿ ಮಾತಾಡಲು ಪುಸಲಾಯಿಸಿದರು. ಅವನು
ಜನರಿಗೆ ಮೌನವಾಗಿರುವಂತೆ ಕೈಸನ್ನೆಮಾಡಿ ಜನರ ಪರವಾಗಿ
ವಾದಿಸಬೇಕೆಂದಿದ್ದನು. 34ಆದರೆ ಅಲೆಕ್ಸಾಂಡರನು ಒಬ್ಬ
ಯೆಹೂದ್ಯನೆಂದು ತಿಳಿದಾಗ ಜನರೆಲ್ಲರು, ‘‘ಎಫೆಸದ
ಅರ್ತೆಮಿಯು ಮಹಾದೇವಿ! ಎಫೆಸದ ಅರ್ತೆಮಿಯು ಮಹಾ
ದೇವಿ! ಅರ್ತೆಮಿಯು ಮಹಾದೇವಿ...!’’ ಎಂದು ಒಂದೇಸಮನೆ
ಎರಡು ತಾಸುಗಳವರೆಗೆ ಕೂಗಿದರು.

35ಬಳಿಕ ಪಟ್ಟಣದ ಅಧಿಕಾರಿಯು ಜನಸಮೂಹವನ್ನು
ಶಾಂತಗೊಳಿಸಿ ಅವರಿಗೆ, ‘‘ಎಫೆಸದ ಜನರೇ, ಮಹಾದೇವತೆ
ಯಾದ ಅರ್ತೆಮಿ ದೇವಿಯ ಗುಡಿಯನ್ನು ಎಫೆಸ ಪಟ್ಟಣವು
ಕಾಪಾಡಿಕೊಂಡು ಬಂದಿರುವುದು ಜನರೆಲ್ಲರಿಗೆ ತಿಳಿದಿದೆ.
ಆಕೆಯ ಪವಿತ್ರ ಕಲ್ಲನ್ನು* ಸಹ ನಾವು ಕಾಪಾಡಿಕೊಂಡು
ಬಂದಿರುವುದು ಜನರೆಲ್ಲರಿಗೆ ಗೊತ್ತಿದೆ. 36ಇದು ಸತ್ಯವಲ್ಲವೆಂದು
ಯಾರೂ ಹೇಳಲಾಗದು. ಆದ್ದರಿಂದ ಮೌನದಿಂದಿರಬೇಕು.
ನೀವು ಏನನ್ನೇ ಮಾಡುವುದಕ್ಕಿಂತ ಮೊದಲು ಸಮಾಧಾನದಿಂದ
ಯೋಚಿಸಬೇಕು. 37ನೀವು ಈ ಜನರನ್ನು ಹಿಡಿದುಕೊಂಡು
ಬಂದಿದ್ದೀರಿ. ಆದರೆ ಇವರು ನಮ್ಮ ದೇವತೆಯ ವಿರೋಧವಾಗಿ
ಯಾವ ಕೆಟ್ಟದ್ದನ್ನೂ ಹೇಳಿಲ್ಲ. ಅವರು ಆಕೆಯ ಗುಡಿಯಿಂದ
ಏನನ್ನೂ ಕದ್ದುಕೊಂಡಿಲ್ಲ.38 ನಮ್ಮಲ್ಲಿ ನ್ಯಾಯಾಲಯಗಳಿವೆ
ಮತ್ತು ನ್ಯಾಯಾಧೀಶರುಗಳು ಇದ್ದಾರೆ. ದೇಮೇತ್ರಿಯ
ನಿಗಾಗಲಿ ಮತ್ತು ಅವನೊಂದಿಗೆ ಕೆಲಸಮಾಡುವ ಜನರಿಗಾಗಲಿ
ಯಾರ ಮೇಲಾದರೂ ದೂರುಗಳಿವೆಯೇ? ದೂರುಗಳಿದ್ದರೆ,
ಅವರು ನ್ಯಾಯಾಲಯಗಳಿಗೆ ಹೋಗಬೇಕು! ಅವರು ಪರಸ್ಪರ
ವಾದ ಮಾಡಲು ಅದೇ ತಕ್ಕಸ್ಥಳ! 39ನೀವು ಬೇರೆ ಏನನ್ನಾದರೂ
ಕುರಿತು ಮಾತಾಡಬೇಕೆಂದಿದ್ದೀರಾ? ಮಾತಾಡಬೇಕೆಂದಿದ್ದರೆ,
ಕಾನೂನು ಬದ್ಧವಾದ ನಗರಸಭೆಗೆ ಬನ್ನಿರಿ. ಅಲ್ಲಿ ಅದನ್ನು
ನಿರ್ಧರಿಸಬಹುದು. 40ನಾನು ಇದನ್ನು ಯಾಕೆ ಹೇಳುತ್ತಿದ್ದೇ
ನಂದರೆ, ಇಂದಿನ ಗಲಭೆಯನ್ನು ಕಂಡ ಕೆಲವು ಜನರು ನಾವು
ದಂಗೆ ಏಳುತ್ತಿದ್ದೇವೆಂದು ಹೇಳುವ ಸಾಧ್ಯತೆಯಿದೆ. ನಾವು ಈ
ಗಲಭೆಯನ್ನು ಸಮರ್ಥಿಸಿಕೊಳ್ಳಲಾಗುವುದಿಲ್ಲ. ಯಾಕೆಂದರೆ
ಈ ಸಭೆಗೆ ಸರಿಯಾದ ಕಾರಣವೇ ಇಲ್ಲ’’ ಎಂದು ಹೇಳಿದನು.
41ಪಟ್ಟಣದ ಅಧಿಕಾರಿಯು ಈ ಸಂಗತಿಗಳನ್ನು ಹೇಳಿದ ಬಳಿಕ
ಮನೆಗೆ ಹೋಗಬೇಕೆಂದು ಜನರಿಗೆ ತಿಳಿಸಿದನು. ಆಗ
ಅವರೆಲ್ಲರು ಹೊರಟುಹೋದರು.

## ಮಕೆದೋನಿಯಕ್ಕೆ ಮತ್ತು ಗ್ರೀಸಿಗೆ ಪೌಲನ ಪ್ರಯಾಣ

20 ಗಲಭೆಯು ನಿಂತುಹೋದ ಮೇಲೆ, ಪೌಲನು
ಯೇಸುವಿನ ಶಿಷ್ಯರನ್ನು ಕರೆಯಿಸಿ ಅವರನ್ನು ಧೈರ್ಯ
ಪಡಿಸಿದನು. ಬಳಿಕ ಪೌಲನು ಅಲ್ಲಿಂದ ಹೊರಟು ಮಕೆದೋನಿ
ಯಾಕ್ಕೆ ಹೋದನು. 2ಅವನು ಆ ಪ್ರದೇಶದಲ್ಲಿ ಪ್ರಯಾಣ
ಮಾಡುತ್ತಾ ಅನೇಕ ಊರುಗಳಿಗೆ ಭೇಟಿನೀಡಿ, ಯೇಸುವಿನ
ಶಿಷ್ಯರಿಗೆ ಅನೇಕ ಸಂಗತಿಗಳನ್ನು ತಿಳಿಸಿ ಬಲಪಡಿಸಿದನು. ಬಳಿಕ
ಪೌಲನು ಗ್ರೀಸಿಗೆ (ಅಖಾಯ)ಹೋದನು. 3ಅಲ್ಲಿ ಅವನು
ಮೂರು ತಿಂಗಳವರೆಗೆ ಇದ್ದನು. ಅವನು ಸಿರಿಯಕ್ಕೆ ನೌಕಾ
ಯಾನ ಮಾಡಲು ಸಿದ್ಧನಾಗಿದ್ದನು. ಆದರೆ ಕೆಲವು ಯೆಹೂದ್ಯರು
ಅವನಿಗೆ ವಿರೋಧವಾಗಿ ಯೋಜನೆ ಮಾಡಿದರು. ಆದ್ದರಿಂದ
ಪೌಲನು ಸಿರಿಯಕ್ಕೆ ಮಕೆದೋನಿಯದ ಮೂಲಕ ಹಿಂತಿರುಗಿ
ಹೋಗಲು ನಿರ್ಧರಿಸಿದನು. 4ಕೆಲವು ಜನರು ಅವನೊಂದಿ
ಗಿದ್ದರು. ಅವರು ಯಾರೆಂದರೆ: ಬೆರೋಯ ಪಟ್ಟಣದ ಪುರ್ರನ
ಮಗನಾದ ಸೋಪತ್ರನು, ಥೆಸಲೋನಿಕ ಪಟ್ಟಣದ ಆರಿಸ್ತಾರ್ಕ
ಮತ್ತು ಸೆಕುಂದ, ದರ್ಬೆ ಪಟ್ಟಣದ ಗಾಯ ಮತ್ತು ತಿಮೊಥೆಯ,
ಅಲ್ಲದೆ ಏಷ್ಯಾದ ತುಖಿಕ ಹಾಗು ತ್ರೊಫಿಮ. 5ಇವರು ಪೌಲನಿ
ಗಿಂತ ಮುಂಚಿತವಾಗಿಯೇ ಹೋದರು. ಅವರು ನಮಗಾಗಿ
ತ್ರೋವ ಪಟ್ಟಣದಲ್ಲಿ ಕಾಯುತ್ತಿದ್ದರು. 6ಯೆಹೂದ್ಯರ ಹುಳಿ
ರಹಿತ ರೊಟ್ಟಿ ಹಬ್ಬದ ನಂತರ ನಾವು ಫಿಲಿಪ್ಪಿ ಪಟ್ಟಣದ ಹಡಗಿ
ನಲ್ಲಿ ಹೋದೆವು. ಐದು ದಿನಗಳಾದ ನಂತರ ನಾವು ಇವರನ್ನು
ತ್ರೋವದಲ್ಲಿ ಸಂಧಿಸಿದೆವು. ಅಲ್ಲಿ ನಾವು ಏಳು ದಿನ ತಂಗಿದೆವು.

## ತ್ರೋವಕ್ಕೆ ಪೌಲನ ಕೊನೆಯ ಭೇಟಿ

7ಭಾನುವಾರದಂದು, ನಾವೆಲ್ಲರು ಪ್ರಭುವಿನ ರಾತ್ರಿ
ಭೋಜನಕ್ಕೆ ಒಟ್ಟಾಗಿ ಸೇರಿದೆವು. ಸಭೆ ಸೇರಿಬಂದಿದ್ದ ಜನ
ರೊಂದಿಗೆ ಪೌಲನು ಮಾತಾಡಿದನು. ಅವನು ಮರುದಿನ
ಅಲ್ಲಿಂದ ಹೊರಡಬೇಕೆಂದು ಆಲೋಚಿಸಿಕೊಂಡಿದ್ದನು.
ಪೌಲನು ಮಧ್ಯರಾತ್ರಿಯವರೆಗೂ ಮಾತಾಡುತ್ತಲೇ ಇದ್ದನು.
8ನಾವೆಲ್ಲರೂ ಮೇಲಂತಸ್ತಿನ ಕೊಠಡಿಯೊಂದರಲ್ಲಿ ಸೇರಿ
ಬಂದಿದ್ದೆವು. ಆ ಕೊಠಡಿಯಲ್ಲಿ ಅನೇಕ ದೀಪಗಳಿದ್ದವು.
9ಯುತಿಕ ಎಂಬ ಯುವಕನು ಕಿಟಕಿಯಲ್ಲಿ ಕುಳಿತುಕೊಂಡಿ
ದ್ದನು. ಪೌಲನು ಮಾತಾಡುತ್ತಲೇ ಇದ್ದನು. ಇತ್ತ ಯುವಕನು
ಗಾಢವಾಗಿ ನಿದ್ರಿಸುತ್ತಾ ಮೂರನೆ ಅಂತಸ್ತಿನಿಂದ ಕೆಳಗಡೆ
ಬಿದ್ದುಬಿಟ್ಟನು. ಜನರು ಕೆಳಗಿಳಿದು ಹೋಗಿ ಅವನನ್ನು ಎತ್ತಿ
ನೋಡಿದಾಗ ಅವನು ಸತ್ತಿದ್ದನು. 10ಪೌಲನು ಕೆಳಗಿಳಿದು ಅವನ
ಬಳಿಗೆ ಹೋಗಿ, ಮೊಣಕಾಲೂರಿ ಅವನನ್ನು ಅಪ್ಪಿಕೊಂಡು,
ಅಲ್ಲಿದ್ದ ವಿಶ್ವಾಸಿಗಳಿಗೆ, ‘‘ಚಿಂತಿಸಬೇಡಿ. ಇವನು ಮತ್ತೆ ಜೀವಂತ
ನಾದನು’’ ಎಂದು ಹೇಳಿದನು. 11ಪೌಲನು ಮತ್ತೆ ಮೇಲಂತಸ್ತಿಗೆ
ಹೋಗಿ ರೊಟ್ಟಿಯನ್ನು ಮುರಿದು ಊಟಮಾಡಿದನು.

---

**ಪವಿತ್ರ ಕಲ್ಲು** ಅರ್ತೆಮಿ ದೇವಿಯೆಂದು ಜನರು ಆರಾಧಿಸುತ್ತಿದ್ದ ಕಲ್ಲಿನ ಪ್ರತಿಮೆ.

ಪೌಲನು ಅವರೊಂದಿಗೆ ದೀರ್ಘಕಾಲ ಮಾತಾಡಿದನು. ಅಷ್ಟ
ರಲ್ಲಿಯೇ ಮುಂಜಾನೆಯಾಗಿತ್ತು. ಬಳಿಕ ಪೌಲನು ಹೊರಟು
ಹೋದನು. 12ಜನರು ಜೀವಂತನಾಗಿದ್ದ ಆ ಯುವಕನನ್ನು
ಮನೆಗೆ ಕರೆದುಕೊಂಡು ಹೋದರು. ಇದರಿಂದ ಜನರಿಗೆ ಬಹಳ
ಆದರಣೆಯಾಯಿತು.

## ತ್ರೋವದಿಂದ ಮಿಲೇತಕ್ಕೆ ಪ್ರಯಾಣ

13ನಾವು ಪೌಲನಿಗಿಂತ ಮುಂಚಿತವಾಗಿಯೇ ಅಸ್ಸೊಸಿ ಎಂಬ
ಪಟ್ಟಣಕ್ಕೆ ನೌಕಾಯಾನ ಮಾಡಿದೆವು. ತಾನು ಭೂಮಾರ್ಗವಾಗಿ
ಬರುವುದಾಗಿಯೂ ಅಸ್ಸೊಸಿನಲ್ಲಿ ನಮ್ಮನ್ನು ಸಂಧಿಸಿ ಅಲ್ಲಿಂದ
ನಮ್ಮೊಂದಿಗೆ ಹಡಗಿನಲ್ಲಿ ಪ್ರಯಾಣ ಮಾಡುವುದಾಗಿಯೂ
ಪೌಲನು ನಮಗೆ ತಿಳಿಸಿದ್ದನು. 14ಅಂತೆಯೇ ನಾವು ಪೌಲನನ್ನು
ಅಸ್ಸೊಸಿನಲ್ಲಿ ಸಂಧಿಸಿದೆವು. ಅಲ್ಲಿಂದ ಅವನು ನಮ್ಮೊಂದಿಗೆ
ಹಡಗಿನಲ್ಲಿ ಪ್ರಯಾಣ ಮಾಡಿದನು. ನಾವೆಲ್ಲರೂ ಮಿತಿಲೇನಿ
ಪಟ್ಟಣಕ್ಕೆ ಹೋದೆವು. 15ಮರುದಿನ ನಾವು ಅಲ್ಲಿಂದ ನೌಕಾ
ಯಾನ ಮಾಡಿ ಖಿಯೋಸ್ ದ್ವೀಪದ ಸಮೀಪದಲ್ಲಿದ್ದ ಸ್ಥಳ
ವೊಂದಕ್ಕೆ ಬಂದೆವು. ಮರುದಿನ ಸಾಮೋಸ್ ದ್ವೀಪಕ್ಕೆ ನೌಕಾ
ಯಾನ ಮಾಡಿದೆವು. ಅದರ ಮೂರನೆಯ ದಿನ ನಾವು ಮಿಲೇತ
ಪಟ್ಟಣಕ್ಕೆ ಬಂದೆವು. 16ಎಫೆಸದಲ್ಲಿ ತಂಗಬಾರದೆಂದು ಪೌಲನು
ಆಗಲೇ ನಿರ್ಧಾರ ಮಾಡಿದ್ದನು. ಏಷ್ಯಾದಲ್ಲಿ ದೀರ್ಘಕಾಲ
ತಂಗಲು ಅವನಿಗೆ ಇಷ್ಟವಿರಲಿಲ್ಲ. ಸಾಧ್ಯವಾದರೆ ಪಂಚಾಶತ್ತಮ
ಹಬ್ಬಕ್ಕೆ ಜೆರುಸಲೇಮಿನಲ್ಲಿರಬೇಕೆಂದು ಅವನು ತನ್ನ ಪ್ರಯಾಣ
ವನ್ನು ತ್ವರಿತಗೊಳಿಸಿದನು.

## ಎಫೆಸದ ಹಿರಿಯರಿಗೆ ಪೌಲನ ಬುದ್ಧಿಮಾತು

17ಪೌಲನು ಮಿಲೇತದಿಂದ ಒಂದು ಸಂದೇಶವನ್ನು ಎಫೆಸಕ್ಕೆ
ಕಳುಹಿಸಿ ಅಲ್ಲಿನ ಸಭೆಯ ಹಿರಿಯರನ್ನು ತನ್ನ ಬಳಿಗೆ ಬರಮಾಡಿ
ಕೊಂಡನು. 18ಆ ಹಿರಿಯರು ಬಂದಾಗ ಪೌಲನು ಅವರಿಗೆ,
‘‘ನಾನು ಏಷ್ಯಾ ಪ್ರಾಂತ್ಯಕ್ಕೆ ಬಂದ ಮೊದಲನೆಯ ದಿನದಿಂದಲೂ
ನೀವು ನನ್ನ ಜೀವಿತದ ಬಗ್ಗೆ ತಿಳಿದಿದ್ದೀರಿ. ನಾನು ನಿಮ್ಮೊಂದಿಗೆ
ಇದ್ದ ಕಾಲದಲ್ಲೆಲ್ಲಾ ನಾನು ಯಾವ ರೀತಿಯಲ್ಲಿ ಜೀವಿಸಿದೆ
ನೆಂಬುದು ನಿಮಗೆ ಗೊತ್ತಿದೆ. 19ಯೆಹೂದ್ಯರು ನನಗೆ
ವಿರೋಧವಾಗಿ ಮಾಡಿದ ಒಳಸಂಚುಗಳಿಂದ ನಾನು ಬಹಳ
ಕಷ್ಟಪಡಬೇಕಾಯಿತು. ಅನೇಕ ಸಲ ಕಣ್ಣೀರಿಡಬೇಕಾಯಿತು.
ಆದರೆ ನಾನು ಯಾವಾಗಲೂ ಪ್ರಭುವಿನ ಸೇವೆ ಮಾಡಿದೆ
ನೆಂಬುದು ನಿಮಗೆ ಗೊತ್ತಿದೆ. ನಾನು ನನ್ನ ಬಗ್ಗೆ ಚಿಂತಿಸದೆ,
20ನಿಮಗೆ ಒಳ್ಳೆಯದನ್ನೇ ಯಾವಾಗಲೂ ಮಾಡಿದೆನು. ನಾನು
ನಿಮಗೆ ಯೇಸುವಿನ ಕುರಿತಾದ ಸುವಾರ್ತೆಯನ್ನು ಬಹಿರಂಗ
ವಾಗಿ ಜನರೆದುರಿನಲ್ಲಿ ತಿಳಿಸಿದೆನು ಮತ್ತು ನಿಮ್ಮ ಮನೆ
ಗಳಲ್ಲಿಯೂ ಸಹ ಬೋಧಿಸಿದೆನು. 21ನಿಮ್ಮ ಹೃದಯಗಳನ್ನು
ಮಾರ್ಪಡಿಸಿಕೊಂಡು ದೇವರ ಕಡೆಗೆ ತಿರುಗಿಕೊಳ್ಳಬೇಕೆಂದು
ನಾನು ಎಲ್ಲಾ ಜನಾಂಗಗಳವರಿಗೆ ಅಂದರೆ ಯೆಹೂದ್ಯರಿಗೂ
ಮತ್ತು ಗ್ರೀಕರಿಗೂ ತಿಳಿಸಿದೆನು. ನಮ್ಮ ಪ್ರಭುವಾದ ಯೇಸುವಿ
ನಲ್ಲಿ ನಂಬಿಕೆ ಇಡಬೇಕೆಂದು ನಾನು ಅವರೆಲ್ಲರಿಗೂ ತಿಳಿಸಿದೆನು.
22ಆದರೆ ಈಗ ನಾನು ಪವಿತ್ರಾತ್ಮನಿಗೆ ವಿಧೇಯನಾಗಿ ಜೆರುಸ
ಲೇಮಿಗೆ ಹೋಗಬೇಕು. ಅಲ್ಲಿ ನನಗೆ ಏನು ಸಂಭವಿಸುವುದೋ
ತಿಳಿಯದು. 23ಜೆರುಸಲೇಮಿನಲ್ಲಿ ತೊಂದರೆಗಳು ಮತ್ತು ಸೆರೆ
ವಾಸವು ನನಗಾಗಿ ಕಾದಿವೆಯೆಂದು ಪವಿತ್ರಾತ್ಮನು ಪ್ರತಿಯೊಂದು
ಪಟ್ಟಣದಲ್ಲಿಯೂ ನನಗೆ ಹೇಳುತ್ತಿರುವುದು ಮಾತ್ರ ಸ್ಪಷ್ಟ
ವಾಗಿದೆ. 24ನಾನು ನನ್ನ ಸ್ವಂತ ಪ್ರಾಣದ ಬಗ್ಗೆ ಚಿಂತಿಸುವುದಿಲ್ಲ.
ಪ್ರಭುವಾದ ಯೇಸು ನನಗೆ ಕೊಟ್ಟಿರುವ ಕೆಲಸವನ್ನು ಪೂರೈಸು
ವುದೇ ನನಗೆ ಅತ್ಯಂತ ಮುಖ್ಯವಾಗಿದೆ. ದೇವರ ಕೃಪೆಯ ವಿಷಯ
ವಾದ ಸುವಾರ್ತೆಯ ಬಗ್ಗೆ ಸಾಕ್ಷಿ ನೀಡುವುದೇ ನನ್ನ ಕೆಲಸವಾಗಿದೆ.
ಆ ಕೆಲಸವನ್ನು ಮಾಡಿ ಪೂರೈಸುವುದೇ ನನ್ನ ಅಪೇಕ್ಷೆಯಾಗಿದೆ.

25‘‘ಈಗ ನನಗೆ ಕಿವಿಗೊಡಿ. ನಿಮ್ಮಲ್ಲಿ ಒಬ್ಬರಾಗಲಿ ನನ್ನನ್ನು
ಮತ್ತೆಂದಿಗೂ ನೋಡುವುದಿಲ್ಲವೆಂದು ನನಗೆ ಗೊತ್ತಿದೆ.
ನಿಮ್ಮೊಂದಿಗೆ ಇದ್ದ ಸಮಯದಲ್ಲೆಲ್ಲಾ ದೇವರ ರಾಜ್ಯದ ವಿಷಯ
ವಾದ ಸುವಾರ್ತೆಯನ್ನು ನಾನು ನಿಮಗೆ ತಿಳಿಸಿದೆನು. 26ಆದ್ದ
ರಿಂದ ಇಂದು ನಾನು ನಿಮಗೆ ದೃಢವಾಗಿ ಹೇಳಬಹುದಾದ
ಒಂದು ಸಂಗತಿಯೇನಂದರೆ, ನಿಮ್ಮಲ್ಲಿ ಯಾರಾದರೂ ರಕ್ಷಣೆ
ಹೊಂದಿಲ್ಲದಿದ್ದರೆ ಅದಕ್ಕೆ ನಾನು ಹೊಣೆಯಲ್ಲ. 27ಯಾಕಂದರೆ
ದೇವರ ಅಪೇಕ್ಷೆಗನುಸಾರವಾಗಿ ನೀವು ತಿಳಿದುಕೊಳ್ಳಬೇಕಾದ
ಪ್ರತಿಯೊಂದನ್ನೂ ನಾನು ನಿಮಗೆ ನಿಶ್ಚಯವಾಗಿ ತಿಳಿಸಿದ್ದೇನೆ.
28ಆದ್ದರಿಂದ ನಿಮ್ಮ ವಿಷಯದಲ್ಲಿಯೂ ಪವಿತ್ರಾತ್ಮನು ನಿಮ್ಮ
ಪಾಲನೆಗೆ ವಹಿಸಿರುವ ಮಂದೆಯ ವಿಷಯದಲ್ಲಿಯೂ ಎಚ್ಚರಿಕೆ
ಯಿಂದಿರಿ. ದೇವರು ತನ್ನ ಸ್ವಂತ ರಕ್ತದಿಂದ ಕೊಂಡುಕೊಂಡಿ
ರುವ ಸಭೆಗೆ ನೀವು ಕುರುಬರಾಗಿದ್ದೀರಿ. 29ನಾನು ಹೊರಟು
ಹೋದ ಮೇಲೆ ಬೇರೆಯವರು ನಿಮ್ಮ ಸಭೆಗೆ ಬರುತ್ತಾರೆಂದು
ನನಗೆ ಗೊತ್ತಿದೆ. ಕ್ರೂರವಾದ ತೋಳಗಳಂತಿರುವ ಅವರು
ಮಂದೆಯನ್ನು ನಾಶಮಾಡಲು ಪ್ರಯತ್ನಿಸುವರು. 30ಅಲ್ಲದೆ,
ನಿಮ್ಮ ಸಭೆಯ ಕೆಲವು ಜನರೇ ದುರ್ಬೋಧಕರಾಗಿ ಯೇಸುವಿನ
ಶಿಷ್ಯರಲ್ಲಿ ಕೆಲವರನ್ನು ಸತ್ಯದಿಂದ ದೂರಕ್ಕೆ ನಡೆಸುವರು. 31ಆದ್ದ
ರಿಂದ ಎಚ್ಚರಿಕೆಯಿಂದಿರಿ! ನಾನು ಮೂರು ವರ್ಷಗಳ ಕಾಲ
ನಿಮ್ಮೊಂದಿಗೆ ಇದ್ದೆನು. ಈ ಕಾಲಾವಧಿಯಲ್ಲಿ ನಾನು ನಿಮಗೆ
ಹಗಲಿರುಳು ಉಪದೇಶಿಸುತ್ತಾ ನಿಮಗಾಗಿ ಕಣ್ಣೀರಿಡುತ್ತಾ
ನಿಮಗೆ ಎಚ್ಚರಿಸಿದ್ದನ್ನು ಮರೆಯದಿರಿ.

32‘‘ಈಗ ನಾನು ನಿಮ್ಮನ್ನು ದೇವರಿಗೂ ಆತನ ಕೃಪಾ
ವಾಕ್ಯಕ್ಕೂ ಒಪ್ಪಿಸಿಕೊಡುತ್ತಿದ್ದೇನೆ. ಆತನ ಕೃಪಾವಾಕ್ಯವು ನಿಮ್ಮ
ಭಕ್ತಿಯನ್ನು ವೃದ್ಧಿಪಡಿಸಿ, ಪರಿಶುದ್ಧರ ಬಾಧ್ಯತೆಯಲ್ಲಿ ಪಾಲು
ಗಾರರನ್ನಾಗಿ ಮಾಡುವುದು. 33ನಾನು ನಿಮ್ಮೊಂದಿಗೆ ಇದ್ದಾಗ,
ಯಾರ ಹಣವನ್ನಾಗಲಿ ಒಳ್ಳೆಯ ಬಟ್ಟೆಗಳನ್ನಾಗಲಿ ಎಂದೂ
ಬಯಸಲಿಲ್ಲ. 34ನಾನು ಯಾವಾಗಲೂ ನನ್ನ ಅಗತ್ಯತೆಗಳನ್ನು
ಮತ್ತು ನನ್ನೊಂದಿಗಿರುವವರ ಅಗತ್ಯತೆಗಳನ್ನು ಪೂರೈಸು
ವುದಕ್ಕಾಗಿ ದುಡಿಯುತ್ತಿದ್ದೆನು ಎಂಬುದು ನಿಮಗೆ ಗೊತ್ತಿದೆ.
35ಕಷ್ಟಪಟ್ಟು ದುಡಿದು ದುರ್ಬಲರಿಗೆ ನೆರವಾಗಬೇಕೆಂದು
ನಾನೇ ನಿಮಗೆ ಮಾದರಿಯಾಗಿ ತೋರಿಸಿಕೊಟ್ಟಿದ್ದೇನೆ. ‘‘ತೆಗೆದು
ಕೊಳ್ಳುವುದಕ್ಕಿಂತ ಕೊಡುವುದರಲ್ಲೇ ಹೆಚ್ಚು ಸಂತೋಷ’ ಎಂಬ
ಯೇಸುವಿನ ಮಾತನ್ನು ನಾವು ಮರೆಯಕೂಡದೆಂದು ನಿಮಗೆ
ಉಪದೇಶಿಸಿದೆನು’’ ಎಂದು ಹೇಳಿದನು.

36ಪೌಲನು ಈ ಸಂಗತಿಗಳನ್ನು ಹೇಳಿ ಮುಗಿಸಿದ ಮೇಲೆ
ಮೊಣಕಾಲೂರಿ ಅವರೆಲ್ಲರೊಡನೆ ಪ್ರಾರ್ಥಿಸಿದನು. 37-38ಅವ
ರೆಲ್ಲರೂ ಬಹಳವಾಗಿ ಅತ್ತರು. ‘‘ನೀವು ನನ್ನನ್ನು ಮತ್ತೆಂದಿಗೂ
ನೋಡುವುದಿಲ್ಲ’’ವೆಂದು ಪೌಲನು ಹೇಳಿದ್ದರಿಂದ ಅವರು
ಬಹಳ ದುಃಖಗೊಂಡಿದ್ದರು. ಅವರು ಪೌಲನನ್ನು ಅಪ್ಪಿಕೊಂಡು

ಮುದ್ದಿಟ್ಟರು. ಅವರು ಹಡಗಿನವರೆಗೂ ಹೋಗಿ ಅವನನ್ನು
ಬೀಳ್ಕೊಟ್ಟರು.

## ಪೌಲನು ಜೆರುಸಲೇಮಿಗೆ ಹೋಗುವನು

21 ನಾವೆಲ್ಲರೂ ಹಿರಿಯರನ್ನು ಬೀಳ್ಕೊಟ್ಟ ಬಳಿಕ
ನೌಕಾಯಾನ ಮಾಡಿ ನೇರವಾಗಿ ಕೋಸ್ ದ್ವೀಪಕ್ಕೆ
ಹೋದೆವು. ಮರುದಿನ ರೋದ ದ್ವೀಪಕ್ಕೆ ಹೋದೆವು ಮತ್ತು
ಅಲ್ಲಿಂದ ಪತಾರಕ್ಕೆ ಹೋದೆವು. 2ಫೆನಿಷ್ಯಕ್ಕೆ ಹೋಗುವ ಹಡಗನ್ನು
ನಾವು ಅಲ್ಲಿ ಕಂಡೆವು. ನಾವು ಆ ಹಡಗನ್ನೇರಿ ಪ್ರಯಾಣ
ಮಾಡಿದೆವು. 3ನಾವು ಸೈಪ್ರಸ್ ದ್ವೀಪದ ಸಮೀಪದಲ್ಲಿ ನೌಕಾ
ಯಾನ ಮಾಡಿದೆವು. ಅದು ನಮ್ಮ ಉತ್ತರ ದಿಕ್ಕಿನಲ್ಲಿ ಕಾಣುತ್ತಿತ್ತು.
ಆದರೆ ನಾವು ಹಡಗನ್ನು ಅಲ್ಲಿ ನಿಲ್ಲಿಸದೆ ಸಿರಿಯ ದೇಶಕ್ಕೆ
ಪ್ರಯಾಣ ಮಾಡಿ ಟೈರ್ ಪಟ್ಟಣದಲ್ಲಿ ಹಡಗನ್ನು ನಿಲ್ಲಿಸಿದೆವು.
ಯಾಕೆಂದರೆ ಹಡಗಿನಿಂದ ಸರಕನ್ನು ಇಳಿಸಬೇಕಾಗಿತ್ತು. 4ನಾವು
ಟೈರ್‌ನಲ್ಲಿ ಯೇಸುವಿನ ಕೆಲವು ಶಿಷ್ಯರನ್ನು ಕಂಡೆವು. ಅವ
ರೊಂದಿಗೆ ಏಳು ದಿನ ತಂಗಿದ್ದೆವು. ಅವರು ಪವಿತ್ರಾತ್ಮನ ಪ್ರೇರಣೆ
ಯಿಂದ ಪೌಲನಿಗೆ, ‘‘ನೀನು ಜೆರುಸಲೇಮಿಗೆ ಹೋಗ
ಬಾರದು’’ ಎಂದು ಎಚ್ಚರಿಕೆ ಕೊಟ್ಟರು. 5ಆದರೆ ನಮ್ಮ ಸಂದ
ರ್ಶನವು ಮುಗಿದ ಮೇಲೆ ನಾವು ಅಲ್ಲಿಂದ ಹೊರಟು ಪ್ರಯಾಣ
ವನ್ನು ಮುಂದುವರಿಸಿದೆವು. ಯೇಸುವಿನ ಎಲ್ಲಾ ಶಿಷ್ಯರು
ಸ್ತ್ರೀಯರು ಮತ್ತು ಮಕ್ಕಳು ಸಹ ನಮ್ಮನ್ನು ಬೀಳ್ಕೊಡುವುದಕ್ಕಾಗಿ
ನಮ್ಮೊಂದಿಗೆ ಪಟ್ಟಣದಿಂದ ಹೊರಗೆ ಬಂದರು. ನಾವೆಲ್ಲರೂ
ಸಮುದ್ರ ತೀರದಲ್ಲಿ ಮೊಣಕಾಲೂರಿ ಪ್ರಾರ್ಥಿಸಿದೆವು. 6ಬಳಿಕ
ನಾವು ಒಬ್ಬರಿಗೊಬ್ಬರು ಅಂತಿಮ ವಂದನೆಗಳನ್ನು ಸಲ್ಲಿಸಿ
ಹಡಗನ್ನು ಹತ್ತಿದೆವು. ಶಿಷ್ಯರು ತಮ್ಮ ಮನೆಗಳಿಗೆ ಹಿಂತಿರು
ಗಿದರು.

7ನಾವು ಟೈರ್‌ನಿಂದ ನಮ್ಮ ಪ್ರಯಾಣವನ್ನು ಮುಂದುವರೆಸಿ
ಪ್ಟೊಲೊಮಾಯ ಎಂಬಲ್ಲಿಗೆ ಹೋದೆವು. ಅಲ್ಲಿಯ ಸಹೋದರ
ರನ್ನು (ವಿಶ್ವಾಸಿಗಳನ್ನು) ವಂದಿಸಿ ಅವರೊಂದಿಗೆ ಒಂದು ದಿನ
ಇದ್ದೆವು. 8ಮರುದಿನ ನಾವು ಪ್ಟೊಲೊಮಾಯದಿಂದ ಹೊರಟು
ಸೆಜರೇಯ ಪಟ್ಟಣಕ್ಕೆ ಹೋದೆವು. ಅಲ್ಲಿ ನಾವು ಫಿಲಿಪ್ಪನ ಮನೆಗೆ
ಹೋಗಿ ಅವನೊಂದಿಗೆ ತಂಗಿದೆವು. ಸುವಾರ್ತೆಯನ್ನು ತಿಳಿಸು
ವುದೇ ಫಿಲಿಪ್ಪನ ಕೆಲಸವಾಗಿತ್ತು. ಏಳುಮಂದಿ ಸಹಾಯಕರು
ಗಳಲ್ಲಿ* ಅವನೂ ಒಬ್ಬನಾಗಿದ್ದನು. 9ಮದುವೆಯಾಗಿಲ್ಲದ
ನಾಲ್ಕು ಮಂದಿ ಹೆಣ್ಣು ಮಕ್ಕಳು ಅವನಿಗಿದ್ದರು. ಅವರೆಲ್ಲರಿಗೂ
ಪ್ರವಾದಿಸುವ ವರವಿತ್ತು. 10ನಾವು ಅಲ್ಲಿಗೆ ಹೋಗಿ ಅನೇಕ
ದಿನಗಳಾದ ಮೇಲೆ, ಅಗಬ ಎಂಬ ಪ್ರವಾದಿಯು ಜುದೇಯ
ದಿಂದ ಬಂದನು. 11ಅವನು ನಮ್ಮ ಬಳಿಗೆ ಬಂದು ಪೌಲನ ನಡು
ಪಟ್ಟಿಯನ್ನು ತೆಗೆದುಕೊಂಡು ಅದರಿಂದ ತನ್ನ ಕೈಕಾಲುಗಳನ್ನು
ಕಟ್ಟಿಕೊಂಡು, ‘‘ಪವಿತ್ರಾತ್ಮನು ನನಗೆ ಹೇಳುವುದೇನಂದರೆ, ‘ಈ
ನಡುಪಟ್ಟಿಯನ್ನು ಕಟ್ಟಿಕೊಳ್ಳುವ ವ್ಯಕ್ತಿಯನ್ನು ಜೆರುಸಲೇಮಿನ
ಯೆಹೂದ್ಯರು ಇದೇ ರೀತಿ ಕಟ್ಟಿಹಾಕುವರು. ಬಳಿಕ ಅವರು
ಅವನನ್ನು ಯೆಹೂದ್ಯರಲ್ಲದ ಜನರಿಗೆ ಒಪ್ಪಿಸಿಕೊಡುವರು’’’
ಎಂದು ಹೇಳಿದನು. 12ನಾವೆಲ್ಲರೂ ಈ ಮಾತುಗಳನ್ನು ಕೇಳಿ
ದೆವು. ಆದ್ದರಿಂದ ನಾವು ಮತ್ತು ಯೇಸುವಿನ ಸ್ಥಳೀಯ ಶಿಷ್ಯರು
ಪೌಲನಿಗೆ, ‘‘ನೀನು ಜೆರುಸಲೇಮಿಗೆ ಹೋಗಬಾರದು’’ ಎಂದು
ಬೇಡಿಕೊಂಡೆವು. 13ಆದರೆ ಪೌಲನು, ‘‘ನೀವು ಯಾಕೆ ಅಳು
ತ್ತಿರುವಿರಿ? ನೀವು ನನಗೆ ಬಹು ದುಃಖವನ್ನು ಯಾಕೆ ಉಂಟು
ಮಾಡುತ್ತಿದ್ದೀರಿ? ನಾನು ಜೆರುಸಲೇಮಿನಲ್ಲಿ ಬಂಧಿಸಲ್ಪಡು
ವುದಕ್ಕಲ್ಲದೆ ಪ್ರಭು ಯೇಸುವಿನ ಹೆಸರಿಗಾಗಿ ಸಾಯುವುದಕ್ಕೂ
ಸಿದ್ಧನಾಗಿದ್ದೇನೆ!’’ ಎಂದು ಹೇಳಿದನು.

14ಜೆರುಸಲೇಮಿಗೆ ಹೋಗದಂತೆ ನಾವು ಅವನನ್ನು ಒಪ್ಪಿಸ
ಲಾಗಲಿಲ್ಲ. ಆದ್ದರಿಂದ ಬೇಡಿಕೊಳ್ಳುವುದನ್ನು ನಿಲ್ಲಿಸಿ, ‘‘ಪ್ರಭು
ವಿನ ಚಿತ್ತವು ನೆರವೇರಲೆಂದು ಪ್ರಾರ್ಥಿಸುತ್ತೇವೆ’’ ಎಂದೆವು.

15ಬಳಿಕ ನಾವು ಸಿದ್ಧರಾಗಿ ಜೆರುಸಲೇಮಿಗೆ ಹೊರಟೆವು.
16ಸೆಜರೇಯ ಪಟ್ಟಣದಿಂದ ಯೇಸುವಿನ ಶಿಷ್ಯರಲ್ಲಿ ಕೆಲವರು
ನಮ್ಮೊಂದಿಗೆ ಬಂದರು. ಈ ಶಿಷ್ಯರು ನಾವು ಇಳಿದುಕೊಳ್ಳ
ಬೇಕಾಗಿದ್ದ ಸೈಪ್ರಸಿನ ಮ್ನಾಸೋನ ಎಂಬವನ ಮನೆಗೆ ನಮ್ಮನ್ನು
ಕರೆದೊಯ್ದರು. ಯೇಸುವಿನ ಆದಿ ಶಿಷ್ಯರಲ್ಲಿ ಮ್ನಾಸೋನನು
ಒಬ್ಬನಾಗಿದ್ದನು.

## ಪೌಲನು ಯಾಕೋಬನನ್ನು ಸಂದರ್ಶಿಸುವನು

17ನಾವು ಜೆರುಸಲೇಮನ್ನು ತಲುಪಿದಾಗ ನಮ್ಮನ್ನು ಕಂಡು
ವಿಶ್ವಾಸಿಗಳಿಗೆ ಸಂತೋಷವಾಯಿತು. 18ಮರುದಿನ ಯಾಕೋಬ
ನನ್ನು ಸಂದರ್ಶಿಸಲು ಪೌಲನು ನಮ್ಮನ್ನು ಕರೆದುಕೊಂಡು
ಹೋದನು. ಹಿರಿಯರೆಲ್ಲರು ಅಲ್ಲಿದ್ದರು. 19ಪೌಲನು ಅವರೆಲ್ಲ
ರನ್ನು ವಂದಿಸಿದನು. ಯೆಹೂದ್ಯರಲ್ಲದ ಜನರ ಮಧ್ಯದಲ್ಲಿ
ಅನೇಕ ಕಾರ್ಯಗಳನ್ನು ಮಾಡುವುದಕ್ಕಾಗಿ ದೇವರು ತನ್ನನ್ನು
ಉಪಯೋಗಿಸಿಕೊಂಡ ಬಗೆಯನ್ನೂ ತನ್ನ ಮೂಲಕವಾಗಿ
ದೇವರು ಮಾಡಿದ ಎಲ್ಲಾ ಕಾರ್ಯಗಳ ಕುರಿತಾಗಿಯೂ ಅವನು
ಅವರಿಗೆ ತಿಳಿಸಿದನು. 20ಈ ಸಂಗತಿಗಳನ್ನು ಕೇಳಿದ ಹಿರಿಯರು
ದೇವರನ್ನು ಕೊಂಡಾಡಿದರು. ಬಳಿಕ ಅವರು ಪೌಲನಿಗೆ,
‘‘ಸಹೋದರನೇ, ವಿಶ್ವಾಸಿಗಳಿಗಾಗಿ ಪರಿವರ್ತನೆಗೊಂಡಿರುವ
ಸಾವಿರಾರು ಮಂದಿ ಯೆಹೂದ್ಯರನ್ನು ನೀನು ಇಲ್ಲಿ ಕಾಣ
ಬಹುದು. ಆದರೆ ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯ
ರಾಗುವುದು ಬಹಳ ಮುಖ್ಯವೆಂಬುದು ಇವರ ಆಲೋಚನೆ.
21ಈ ಯೆಹೂದ್ಯರು ನಿನ್ನ ಉಪದೇಶದ ಬಗ್ಗೆ ಕೇಳಿದ್ದಾರೆ. ಬೇರೆ
ದೇಶಗಳಲ್ಲಿ ಯೆಹೂದ್ಯರಲ್ಲದ ಜನರ ಮಧ್ಯದಲ್ಲಿ ವಾಸ
ವಾಗಿರುವ ಯೆಹೂದ್ಯರಿಗೆ, ‘‘ನೀವು ಮೋಶೆಯ ಧರ್ಮಶಾಸ್ತ್ರ
ವನ್ನು ತ್ಯಜಿಸಿರಿ; ನಿಮ್ಮ ಮಕ್ಕಳಿಗೆ ಸುನ್ನತಿ ಮಾಡಬೇಡಿರಿ;
ಯೆಹೂದ್ಯರ ಸಂಪ್ರದಾಯಗಳಿಗೆ ವಿಧೇಯರಾಗಬೇಡಿರಿ’’
ಎಂಬುದಾಗಿ ಹೇಳುತ್ತಿರುವಿಯೆಂದು ಅವರು ಕೇಳಿದ್ದಾರೆ.
22ಈಗ ನಾವು ಏನು ಮಾಡೋಣ? ನೀನು ಬಂದಿರುವ
ವಿಷಯವು ಇಲ್ಲಿರುವ ಯೆಹೂದ್ಯ ವಿಶ್ವಾಸಿಗಳಿಗೆ ತಿಳಿಯುವುದು.
23ಆದರೆ ಈಗ ನೀನು ಏನು ಮಾಡಬೇಕೆಂಬುದನ್ನು ನಾವು ನಿನಗೆ
ತಿಳಿಸುತ್ತೇವೆ: ನಮ್ಮ ಜನರಲ್ಲಿ ನಾಲ್ಕು ಮಂದಿ ದೇವರಿಗೆ ಹರಕೆ
ಮಾಡಿಕೊಂಡಿದ್ದಾರೆ. 24ನೀನು ಅವರನ್ನು ನಿನ್ನೊಂದಿಗೆ ಕರೆದು
ಕೊಂಡು ಹೋಗಿ ಅವರ ಶುದ್ಧಾಚಾರದ ಸಂಪ್ರದಾಯದಲ್ಲಿ
ಭಾಗವಹಿಸು. ಅವರ ಖರ್ಚುವೆಚ್ಚವನ್ನೆಲ್ಲ ಕೊಡು. ಬಳಿಕ
ಅವರು ತಮ್ಮ ತಲೆಬೋಳಿಸಿಕೊಳ್ಳಲಿ. ನೀನು ಹೀಗೆ ಮಾಡಿದರೆ,
ನಿನ್ನ ಬಗ್ಗೆ ಅವರು ಕೇಳಿದ ಸಂಗತಿಗಳು ಸತ್ಯವಲ್ಲವೆಂದು ಅವರೆಲ್ಲ
ರಿಗೂ ಮನದಟ್ಟಾಗುವುದು. ಸ್ವತಃ ನೀನೇ ಮೋಶೆಯ ಧರ್ಮ

**ಸಹಾಯಕರು** ವಿಶೇಷ ಕಾರ್ಯಕ್ಕಾಗಿ ಆರಿಸಲ್ಪಟ್ಟವರು. ಅಪೊಸ್ತಲರ ಕಾರ್ಯಗಳು 6:1-6.

ಶಾಸ್ತ್ರಕ್ಕೆ ವಿಧೇಯನಾಗುತ್ತಿರುವುದನ್ನು ಅವರೆಲ್ಲರೂ ಕಣ್ಣಾರೆ
ಕಾಣುವರು. 25ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ನಾವು ಒಂದು
ಪತ್ರವನ್ನು ಈಗಾಗಲೇ ಕಳುಹಿಸಿದ್ದೇವೆ.

> ‘ವಿಗ್ರಹಗಳಿಗೆ ಅರ್ಪಿಸಿದ ಆಹಾರ ಪದಾರ್ಥಗಳನ್ನು
> ತಿನ್ನಬೇಡಿ. ರಕ್ತವನ್ನು ತಿನ್ನಬೇಡಿ. ಕುತ್ತಿಗೆಹಿಸುಕಿ
> ಕೊಂದ ಪ್ರಾಣಿಗಳ ಮಾಂಸವನ್ನು ತಿನ್ನಬೇಡಿ.
> ಯಾವ ಬಗೆಯ ಲೈಂಗಿಕ ಪಾಪವನ್ನು ಮಾಡಬೇಡಿ’

ಎಂದು ಆ ಪತ್ರದಲ್ಲಿ ಬರೆಯಲಾಗಿದೆ'' ಎಂದರು.
26ಆಗ ಪೌಲನು ಆ ನಾಲ್ಕುಮಂದಿಯನ್ನು ತನ್ನೊಂದಿಗೆ
ಕರೆದುಕೊಂಡು ಹೋದನು. ಮರುದಿನ ಪೌಲನು, ಶುದ್ಧಾ
ಚಾರದ ವ್ರತದಲ್ಲಿ ಭಾಗವಹಿಸಿದನು. ಬಳಿಕ ಅವನು ದೇವಾ
ಲಯಕ್ಕೆ ಹೋಗಿ ಶುದ್ಧಾಚಾರದ ಸಂಪ್ರದಾಯ ಮುಗಿಯುವ
ದಿನವನ್ನು ಪ್ರಕಟಿಸಿದನು. ಕೊನೆಯ ದಿನದಲ್ಲಿ ಪ್ರತಿಯೊಬ್ಬ ವ್ಯಕ್ತಿ
ಗಾಗಿಯೂ ಯಜ್ಞವನ್ನರ್ಪಿಸಬೇಕಾಗಿತ್ತು.
27ಆ ಏಳು ದಿನಗಳ ಅವಧಿ ಮುಗಿಯುವುದರಲ್ಲಿತ್ತು. ಆದರೆ
ಏಷ್ಯಾದಿಂದ ಬಂದಿದ್ದ ಕೆಲವು ಯೆಹೂದ್ಯರು ಪೌಲನನ್ನು ಕಂಡು
ಜನಸಮೂಹವನ್ನು ಉದ್ದೇಶಿಸಿ, 28''ಯೆಹೂದ್ಯ ಜನರೇ,
ನಮಗೆ ಸಹಾಯಮಾಡಿ! ಮೋಶೆಯ ಧರ್ಮಶಾಸ್ತ್ರಕ್ಕೂ ನಮ್ಮ
ಜನರಿಗೂ ಮತ್ತು ಈ ಸ್ಥಳಕ್ಕೂ (ದೇವಾಲಯ) ವಿರೋಧವಾಗಿ
ಎಲ್ಲಾ ಕಡೆಗಳಲ್ಲಿ ಜನರಿಗೆ ಉಪದೇಶಿಸುತ್ತಿದ್ದವನು ಇವನೇ.
ಈಗ ಇವನು ಕೆಲವು ಗ್ರೀಕರನ್ನು ದೇವಾಲಯದೊಳಕ್ಕೆ ಕರೆದು
ಕೊಂಡು ಬಂದಿದ್ದಾನೆ! ಈ ಪವಿತ್ರ ಸ್ಥಳವನ್ನು ಇವನು ಅಶುದ್ಧ
ಗೊಳಿಸಿದ್ದಾನೆ!'' ಎಂದು ಕೂಗಿ ಹೇಳಿ ಗಲಿಬಿಲಿ ಮಾಡಿದರು.
29(ಜೆರುಸಲೇಮಿನಲ್ಲಿ ಪೌಲನೊಂದಿಗಿದ್ದ ತ್ರೊಫಿಮ ಎಂಬ
ವನನ್ನು ಆ ಯೆಹೂದ್ಯರು ನೋಡಿದ್ದರು. ಎಫೆಸದ ತ್ರೊಫಿಮನು
ಗ್ರೀಕನಾಗಿದ್ದನು. ಪೌಲನು ಇವನನ್ನು ಪವಿತ್ರ ಸ್ಥಳದೊಳಗೆ
ಕರೆದುಕೊಂಡು ಹೋಗಿದ್ದಾನೆಂದು ಅವರು ಭಾವಿಸಿ
ಕೊಂಡರು.)
30ಜೆರುಸಲೇಮಿನ ಜನರೆಲ್ಲರು ಬಹು ಕೋಪಗೊಂಡರು.
ಅವರೆಲ್ಲರು ಓಡಿಹೋಗಿ ಪೌಲನನ್ನು ಹಿಡಿದು ದೇವಾಲಯ
ದೊಳಗಿಂದ ಎಳೆದುಕೊಂಡು ಬಂದರು. ಆ ಕೂಡಲೇ ದೇವಾ
ಲಯದ ಬಾಗಿಲುಗಳನ್ನು ಮುಚ್ಚಲಾಯಿತು. 31ಅವರು ಪೌಲ
ನನ್ನು ಕೊಲ್ಲಲು ಪ್ರಯತ್ನಿಸುತ್ತಿದ್ದಾಗ ಇಡೀ ಪಟ್ಟಣದಲ್ಲೇ ಗಲಭೆ
ಯುಂಟಾಗಿದೆ ಎಂಬ ಸುದ್ದಿಯು ಜೆರುಸಲೇಮಿನಲ್ಲಿದ್ದ
ರೋಮ್ ಸೇನಾಧಿಪತಿಗೆ ತಿಳಿಯಿತು. 32ತಕ್ಷಣವೇ ಅವನು
ಕೆಲವು ಸೇನಾಧಿಕಾರಿಗಳನ್ನು ಮತ್ತು ಸೈನಿಕರನ್ನು ತನ್ನೊಂದಿಗೆ
ಕರೆದುಕೊಂಡು ಜನಸಮೂಹದ ಕಡೆಗೆ ಹೋದನು. ಸೇನಾಧಿ
ಪತಿಯನ್ನು ಮತ್ತು ಅವನ ಸೈನಿಕರನ್ನು ಕಂಡ ಜನರು ಪೌಲನಿಗೆ
ಹೊಡೆಯುವುದನ್ನು ನಿಲ್ಲಿಸಿದರು. 33ಸೇನಾಧಿಪತಿಯು ಹೋಗಿ
ಪೌಲನನ್ನು ಬಂಧಿಸಿ ಎರಡು ಸರಪಣಿಗಳಿಂದ ಅವನನ್ನು ಕಟ್ಟಲು
ಸೈನಿಕರಿಗೆ ಹೇಳಿದನು. ಬಳಿಕ ಸೇನಾಧಿಪತಿಯು, ''ಈ
ಮನುಷ್ಯನು ಯಾರು? ಅವನು ಏನು ತಪ್ಪು ಮಾಡಿದನು?''
ಎಂದು ವಿಚಾರಿಸಿದನು. 34ಅಲ್ಲಿದ್ದ ಜನರಲ್ಲಿ ಕೆಲವರು ಒಂದು
ವಿಷಯದ ಬಗ್ಗೆ ಬೊಬ್ಬೆಹಾಕುತ್ತಿದ್ದರೆ, ಉಳಿದವರು ಇತರ
ವಿಷಯಗಳ ಬಗ್ಗೆ ಬೊಬ್ಬೆಹಾಕುತ್ತಿದ್ದರು. ಈ ಗಲಿಬಿಲಿಯಿಂದಾ
ಗಿಯೂ ಕೂಗಾಟದಿಂದಾಗಿಯೂ ಏನು ನಡೆಯಿತೆಂಬುದರ
ಬಗ್ಗೆ ಸತ್ಯವನ್ನು ತಿಳಿದುಕೊಳ್ಳಲಾಗಲಿಲ್ಲ. ಆದ್ದರಿಂದ ಸೇನಾಧಿ
ಪತಿಯು ಪೌಲನನ್ನು ಸೈನ್ಯದ ಕೋಟೆಯೊಳಕ್ಕೆ ತೆಗೆದುಕೊಂಡು
ಹೋಗಲು ಸೈನಿಕರಿಗೆ ತಿಳಿಸಿದನು. 35-36ಎಲ್ಲಾ ಜನರು
ಅವರನ್ನು ಹಿಂಬಾಲಿಸಿದರು. ಸೈನಿಕರು ಮೆಟ್ಟಿಲುಗಳ ಬಳಿಗೆ
ಬಂದಾಗ ಪೌಲನನ್ನು ರಕ್ಷಿಸಲು ಹೊತ್ತುಕೊಂಡು ಹೋದರು.
ಯಾಕೆಂದರೆ ಅವನಿಗೆ ಕೇಡು ಮಾಡಲು ಸಿದ್ಧರಾಗಿದ್ದ ಜನರು,
''ಅವನನ್ನು ಕೊಲ್ಲಿರಿ!'' ಎಂದು ಕೂಗುತ್ತಿದ್ದರು.
37ಸೈನಿಕರು ಪೌಲನನ್ನು ಸೈನ್ಯದ ಕೋಟೆಯೊಳಗೆ
ಕೊಂಡೊಯ್ಯುತ್ತಿದ್ದಾಗ , ಪೌಲನು ಸೇನಾಧಿಪತಿಗೆ, ''ನಾನು
ನಿನ್ನೊಂದಿಗೆ ಸ್ವಲ್ಪ ಮಾತಾಡಬಹುದೇ?'' ಎಂದು ಕೇಳಿದನು.
ಸೇನಾಧಿಪತಿಯು, ''ಓಹೋ, ನಿನಗೆ ಗ್ರೀಕ್ ಭಾಷೆ
ಗೊತ್ತಿದೆಯಾ? 38ಹಾಗಾದರೆ, ನಾನು ಯೋಚಿಸಿದ ವ್ಯಕ್ತಿ
ನೀನಲ್ಲ. ಸ್ವಲ್ಪಕಾಲದ ಹಿಂದೆ ಗಲಭೆ ಆರಂಭಿಸಿದ ಈಜಿಪ್ಟಿ
ನವನೇ ನೀನೆಂದು ನಾನು ಭಾವಿಸಿದ್ದೆ. ಆ ಈಜಿಪ್ಟಿನವನು ನಾಲ್ಕು
ಸಾವಿರ ಮಂದಿ ಕೊಲೆಗಾರರನ್ನು ಮರಳುಗಾಡಿಗೆ ಕರೆದು
ಕೊಂಡು ಹೋದನು'' ಎಂದು ಹೇಳಿದನು.
39ಪೌಲನು, ''ಇಲ್ಲ, ನಾನು ತಾರ್ಸದ ಯೆಹೂದ್ಯನು.
ತಾರ್ಸವು ಸಿಲಿಸಿಯ ದೇಶದಲ್ಲಿದೆ. ನಾನು ಆ ಪ್ರಮುಖ ನಗರದ
ಪ್ರಜೆ. ದಯವಿಟ್ಟು ಜನರೊಂದಿಗೆ ಮಾತಾಡಲು ನನಗೆ ಅಪ್ಪಣೆ
ಯಾಗಲಿ'' ಎಂದು ಹೇಳಿದನು.
40ಜನರೊಂದಿಗೆ ಮಾತಾಡಲು ಸೇನಾಧಿಪತಿ ಪೌಲನಿಗೆ
ಅಪ್ಪಣೆಕೊಟ್ಟನು. ಆದ್ದರಿಂದ ಪೌಲನು ಮೆಟ್ಟಿಲುಗಳ ಮೇಲೆ
ನಿಂತುಕೊಂಡನು. ಬಳಿಕ, ಮೌನವಾಗಿರುವಂತೆ ಜನರಿಗೆ ಕೈಸನ್ನೆ
ಮಾಡಿದನು. ಜನರು ಮೌನವಾದರು. ಆಗ ಪೌಲನು ಅವ
ರೊಂದಿಗೆ ಯೆಹೂದ್ಯರ ಭಾಷೆಯಲ್ಲಿ ಮಾತಾಡಿದನು.

## ಪೌಲನ ಸಾಕ್ಷಿ

22 ಪೌಲನು, ''ನನ್ನ ಸಹೋದರರೇ, ನನ್ನ ತಂದೆಗಳೇ,
ನನ್ನ ಪ್ರತಿವಾದವನ್ನು ಕೇಳಿರಿ!'' ಎಂದನು. 2ಪೌಲನು
ಯೆಹೂದ್ಯರ ಭಾಷೆಯಲ್ಲಿ ಮಾತಾಡುತ್ತಿರುವುದನ್ನು ಕೇಳಿ
ಯೆಹೂದ್ಯರು ಮತ್ತಷ್ಟು ನಿಶಬ್ಧರಾದರು. 3ಆಗ ಪೌಲನು
ಇಂತೆಂದನು: '' ನಾನು ಯೆಹೂದ್ಯನು. ನಾನು ಹುಟ್ಟಿದ್ದು
ಸಿಲಿಸಿಯ ದೇಶದ ತಾರ್ಸದಲ್ಲಿ. ಆದರೆ ನಾನು ಬೆಳೆದದ್ದು ಈ
ಪಟ್ಟಣದಲ್ಲಿ. ನಾನು ಗಮಲಿಯೇಲನ ವಿದ್ಯಾರ್ಥಿಯಾಗಿದ್ದೆನು.
ನಮ್ಮ ಪಿತೃಗಳ ಧರ್ಮಶಾಸ್ತ್ರದ ಬಗ್ಗೆ ಪ್ರತಿಯೊಂದನ್ನೂ ಅವನು
ನನಗೆ ಬಹು ಸೂಕ್ಷ್ಮವಾಗಿ ಬೋಧಿಸಿದ್ದಾನೆ. ಇಂದು ಇಲ್ಲಿರುವ
ನಿಮ್ಮೆಲ್ಲರಂತೆಯೇ ನಾನೂ ದೇವರ ಸೇವೆಯ ಬಗ್ಗೆ ಬಹಳ
ಅಭಿಮಾನ ಉಳ್ಳವನಾಗಿದ್ದೆ. 4ಯೇಸುವಿನ ಮಾರ್ಗವನ್ನು
ಯಾರು ಹಿಂಬಾಲಿಸುತ್ತಾರೋ ಅವರನ್ನು ನಾನು ಹಿಂಸಿಸಿದೆನು.
ನನ್ನ ದೆಸೆಯಿಂದ ಅವರಲ್ಲಿ ಕೆಲವರು ಕೊಲ್ಲಲ್ಪಟ್ಟರು. ನಾನು
ಪುರುಷರನ್ನು ಮತ್ತು ಸ್ತ್ರೀಯರನ್ನು ಬಂಧಿಸಿ ಸೆರೆಮನೆಗೆ ಹಾಕಿ
ದೆನು. 5ಇದು ಸತ್ಯವೆಂಬುವುದಕ್ಕೆ ಪ್ರಧಾನಯಾಜಕರು ಮತ್ತು
ಯೆಹೂದ್ಯರ ಹಿರೀನಾಯಕರ ಸಭೆಯವರೆಲ್ಲರು ಸಾಕ್ಷಿಗಳಾಗಿ
ದ್ದಾರೆ. ಒಂದು ಸಲ, ಈ ನಾಯಕರು ನನಗೆ ಕೆಲವು ಪತ್ರಗಳನ್ನು
ಕೊಟ್ಟರು. ದಮಸ್ಕ ಪಟ್ಟಣದಲ್ಲಿನ ಯೆಹೂದ್ಯ ಸಹೋದರರಿಗೆ
ಆ ಪತ್ರಗಳನ್ನು ಬರೆಯಲಾಗಿತ್ತು. (ಯೇಸುವಿನ) ಶಿಷ್ಯರನ್ನು

ಬಂಧಿಸಿ ದಂಡಿಸುವುದಕ್ಕಾಗಿ ಅವರನ್ನು ಜೆರುಸಲೇಮಿಗೆ ಎಳೆದು
ಕೊಂಡು ಬರಲು ನಾನು ಅಲ್ಲಿಗೆ ಹೋಗುತ್ತಿದ್ದೆ.

6‘‘ನಾನು ಪ್ರಯಾಣ ಮಾಡುತ್ತಾ ದಮಸ್ಕದ ಸಮೀಪಕ್ಕೆ
ಬಂದಾಗ ಒಂದು ಘಟನೆ ಸಂಭವಿಸಿತು. ಆಗ ಸುಮಾರು
ಮಧ್ಯಾಹ್ನವಾಗಿತ್ತು. ಇದ್ದಕ್ಕಿದ್ದಂತೆ ಪ್ರಕಾಶಮಾನವಾದ ಬೆಳ
ಕೊಂದು ನನ್ನ ಸುತ್ತಲೂ ಪ್ರಕಾಶಿಸಿತು. 7ನಾನು ನೆಲಕ್ಕೆ ಬಿದ್ದೆನು.
ಆಗ ವಾಣಿಯೊಂದು ನನಗೆ, ‘‘ಸೌಲನೇ, ಸೌಲನೇ, ನೀನು
ನನ್ನನ್ನು ಯಾಕೆ ಹಿಂಸೆ ಪಡಿಸುತ್ತಿರುವೆ?’’ ಎಂದು ಹೇಳಿತು.
8ನಾನು, ‘ಪ್ರಭುವೇ, ನೀನು ಯಾರು?’ ಎಂದು ಕೇಳಿದೆನು. ಆ
ವಾಣಿಯು, ‘ನಾನು ನಜರೇತಿನ ಯೇಸು. ನೀನು ಹಿಂಸಿಸು
ತ್ತಿರುವುದು ನನ್ನನ್ನೇ’ ಎಂದು ಹೇಳಿತು. 9ನನ್ನೊಂದಿಗಿದ್ದ ಜನರು
ನನ್ನ ಸಂಗಡ ಮಾತಾಡುತ್ತಿದ್ದ ವ್ಯಕ್ತಿಯ ಸ್ವರವನ್ನು ಕೇಳಲಿಲ್ಲ.
ಆದರೆ ಅವರು ಬೆಳಕನ್ನು ನೋಡಿದರು. 10ನಾನು, ‘ಪ್ರಭುವೇ
ನಾನೇನು ಮಾಡಲಿ?’ ಎಂದೆನು. ಪ್ರಭುವು ‘ಎದ್ದು ದಮಸ್ಕ
ದೊಳಗೆ ಹೋಗು. ನಾನು ನಿನಗೆ ನೇಮಿಸಿರುವ ಕೆಲಸಗಳನ್ನೆಲ್ಲಾ
ಅಲ್ಲಿ ನಿನಗೆ ತಿಳಿಸಲಾಗುವುದು’ ಎಂದು ಉತ್ತರಕೊಟ್ಟನು.
11ಪ್ರಕಾಶಮಾನವಾದ ಆ ಬೆಳಕು ನನ್ನನ್ನು ಕುರುಡನನ್ನಾಗಿ
ಮಾಡಿದ್ದರಿಂದ ನನಗೆ ಏನೂ ಕಾಣಲಿಲ್ಲ. ಆದ್ದರಿಂದ ಆ ಜನರು
ನನ್ನನ್ನು ದಮಸ್ಕಕ್ಕೆ ಕೈಹಿಡಿದು ನಡೆಸಿಕೊಂಡು ಹೋದರು.

12‘‘ದಮಸ್ಕದಲ್ಲಿ ಅನನೀಯ ಎಂಬವನು ನನ್ನ ಬಳಿಗೆ
ಬಂದನು. ಅನನೀಯನು ಧಾರ್ಮಿಕ ವ್ಯಕ್ತಿಯಾಗಿದ್ದನು. ಅವನು
ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯನಾಗಿದ್ದನು. ಅಲ್ಲಿ
ವಾಸವಾಗಿದ್ದ ಯೆಹೂದ್ಯರೆಲ್ಲರು ಅವನನ್ನು ಗೌರವಿಸುತ್ತಿದ್ದರು.
13ಅನನೀಯನು ನನ್ನ ಬಳಿಗೆ ಬಂದು, ‘ಸಹೋದರನಾದ
ಸೌಲನೇ, ನಿನಗೆ ಮತ್ತೆ ದೃಷ್ಟಿ ಬರಲಿ!’ ಎಂದನು. ಆ ಕೂಡಲೇ
ನನಗೆ ದೃಷ್ಟಿ ಬಂದಿತು, ಮತ್ತು ನಾನು ಅವನನ್ನು ನೋಡಿದೆನು.
14ಅನನೀಯನು ನನಗೆ ‘ನಮ್ಮ ಪಿತೃಗಳ ದೇವರು ಬಹುಕಾಲದ
ಹಿಂದೆಯೇ ನಿನ್ನನ್ನು ಆರಿಸಿಕೊಂಡನು. ನೀನು ದೇವರ
ಯೋಜನೆಯನ್ನು ತಿಳಿದುಕೊಳ್ಳಬೇಕೆಂದೂ ನೀತಿಸ್ವರೂಪ
ನನ್ನು (ಯೇಸು) ನೋಡಬೇಕೆಂತಲೂ ಆತನ ವಾಕ್ಯಗಳನ್ನು
ಕೇಳಬೇಕೆಂತಲೂ ದೇವರು ನಿನ್ನನ್ನು ಆರಿಸಿಕೊಂಡನು.
15ನೀನು ಕಂಡ ಮತ್ತು ಕೇಳಿದ ಸಂಗತಿಗಳ ಬಗ್ಗೆ ಎಲ್ಲಾ ಜನರಿಗೆ
ಸಾಕ್ಷಿಯಾಗಿರುವೆ. 16ಈಗ ನೀನು ತಡಮಾಡುವುದೇಕೆ?
ಎದ್ದೇಳು! ಆತನಲ್ಲಿ ನಂಬಿಕೆಯಿಟ್ಟು ದೀಕ್ಷಾಸ್ನಾನ ಮಾಡಿಸಿ
ಕೊಂಡು ನಿನ್ನ ಪಾಪಗಳನ್ನು ತೊಳೆದುಕೊ,’ ಎಂದು ಹೇಳಿದನು.

17‘‘ತರುವಾಯ ನಾನು ಜೆರುಸಲೇಮಿಗೆ ಹಿಂತಿರುಗಿದೆನು.
ನಾನು ದೇವಾಲಯದ ಅಂಗಳದಲ್ಲಿ ಪ್ರಾರ್ಥಿಸುತ್ತಿದ್ದಾಗ ನನ
ಗೊಂದು ದರ್ಶನವಾಯಿತು. 18ನಾನು ಯೇಸುವನ್ನು ಕಂಡೆನು.
ಆತನು ನನಗೆ‘ ಬೇಗನೆ ಜೆರುಸಲೇಮಿನಿಂದ ಹೊರಡು! ನನ್ನ
ಕುರಿತಾದ ಸಾಕ್ಷಿಯನ್ನು ಈ ಜನರು ಸ್ವೀಕರಿಸುವುದಿಲ್ಲ.’ ಎಂದು
ಹೇಳಿದನು. 19ನಾನು ‘ಪ್ರಭುವೇ, ವಿಶ್ವಾಸಿಗಳನ್ನು ಸೆರೆಮನೆ
ಗಳಿಗೆ ಹಾಕಿಸಿ ಹೊಡೆಸುತ್ತಿದ್ದವನು ನಾನೇ ಎಂಬುದು ಜನರಿಗೆ
ಗೊತ್ತಿದೆ. ನಿನ್ನಲ್ಲಿ ನಂಬಿಕೆಯಿಟ್ಟಿರುವ ಜನರನ್ನು ಪತ್ತೆಹಚ್ಚಿ
ಬಂಧಿಸುವುದಕ್ಕಾಗಿ ನಾನು ಎಲ್ಲಾ ಸಭಾಮಂದಿರಗಳಿಗೆ ಹೋಗಿ
ದ್ದೇನೆ. 20ನಿನ್ನ ಸಾಕ್ಷಿಯಾದ ಸ್ತೆಫನನು ಕೊಲ್ಲಲ್ಪಟ್ಟಾಗ ನಾನು
ಅಲ್ಲಿದ್ದದ್ದು ಸಹ ಜನರಿಗೆ ಗೊತ್ತಿದೆ. ಸ್ತೆಫನನನ್ನು ಕೊಲ್ಲಲು
ಅವರು ನಿರ್ಧರಿಸಿದಾಗ ನಾನೂ ಅದಕ್ಕೆ ಒಪ್ಪಿಗೆ ಸೂಚಿಸಿ ಅಲ್ಲೇ
ನಿಂತುಕೊಂಡಿದ್ದೆನು. ಅಲ್ಲದೆ ಅವನನ್ನು ಕೊಲ್ಲುತ್ತಿದ್ದ ಜನರ
ಮೇಲಂಗಿಗಳನ್ನು ಸಹ ನಾನು ಹಿಡಿದುಕೊಂಡಿದ್ದೆ!’ ಎಂದೆನು.
21ಆದರೆ, ಯೇಸು ನನಗೆ, ‘ಈಗ ಹೊರಡು, ಬಹುದೂರ
ದಲ್ಲಿರುವ ಯೆಹೂದ್ಯರಲ್ಲದ ಜನರ ಬಳಿಗೆ ನಾನು ನಿನ್ನನ್ನು
ಕಳುಹಿಸುವೆನು’ ಎಂದು ಹೇಳಿದನು.’’

22ಪೌಲನು ಈ ಕೊನೆಯ ಸಂಗತಿಯನ್ನು ಅಂದರೆ
ಯೆಹೂದ್ಯರಲ್ಲದವರ ಬಳಿಗೆ ಹೋಗುವುದರ ಬಗ್ಗೆ ಹೇಳಿದಾಗ
ಅವರು ಅವನ ಮಾತಿಗೆ ಕಿವಿಗೊಡುವುದನ್ನು ನಿಲ್ಲಿಸಿ, ‘‘ಅವನನ್ನು
ಕೊಲ್ಲಿರಿ! ಅವನನ್ನು ಪ್ರಪಂಚದಿಂದ ತೊಲಗಿಸಿರಿ! ಇಂಥ
ಮನುಷ್ಯನಿಗೆ ಜೀವಿಸಲು ಅವಕಾಶವನ್ನೇ ಕೊಡಕೂಡದು!’’
ಎಂದು ಕೂಗಿದರು. 23ಅವರು ಬೊಬ್ಬೆಹಾಕಿದರು; ತಮ್ಮ
ಮೇಲಂಗಿಗಳನ್ನು ಬಿಚ್ಚಿ ಬೀಸಿದರು; ಧೂಳನ್ನು ಮೇಲಕ್ಕೆ
ತೂರಿದರು. 24ಆಗ ಸೇನಾಧಿಪತಿಯು ಪೌಲನನ್ನು ದಂಡಿನ
ಪಾಳೆಯದೊಳಗೆ ಕರೆದುಕೊಂಡು ಹೋಗಿ ಹೊಡೆಯಲು ಸೈನಿಕ
ರಿಗೆ ಹೇಳಿದನು. ಜನರು ಪೌಲನ ವಿರೋಧವಾಗಿ ಈ ರೀತಿ
ಕೂಗಲು ಕಾರಣವೇನೆಂದು ಪೌಲನಿಂದಲೇ ಹೇಳಿಸ
ಬೇಕೆಂಬುದು ಸೇನಾಧಿಪತಿಯ ಅಪೇಕ್ಷೆಯಾಗಿತ್ತು. 25ಸೈನಿಕರು
ಹೊಡೆಯುವುದಕ್ಕಾಗಿ ಪೌಲನನ್ನು ಕಟ್ಟುತ್ತಿರಲು ಅಲ್ಲಿದ್ದ
ರೋಮ್ ಅಧಿಕಾರಿಗೆ ಪೌಲನು, ‘‘ಅಪರಾಧಿಯೆಂದು
ತೀರ್ಪಾಗಿಲ್ಲದ ರೋಮ್ ಪ್ರಜೆಯೊಬ್ಬನನ್ನು ಹೊಡೆಯಲು
ನಿಮಗೆ ಹಕ್ಕಿದೆಯೋ?’’ ಎಂದು ಕೇಳಿದನು.

26ಆ ಅಧಿಕಾರಿಯು ಇದನ್ನು ಕೇಳಿದ ಕೂಡಲೇ ಸೇನಾಧಿ
ಪತಿಯ ಬಳಿಗೆ ಬಂದು, ‘‘ನೀನು ಏನು ಮಾಡುತ್ತಿರುವೆ
ಎಂಬುದು ನಿನಗೆ ಗೊತ್ತಿದೆಯೋ? ಈ ಮನುಷ್ಯನು ರೋಮಿನ
ಪ್ರಜೆ!’’ ಎಂದು ಹೇಳಿದನು.

27ಸೇನಾಧಿಪತಿಯು ಪೌಲನ ಬಳಿಗೆ ಬಂದು, ‘‘ಹೇಳು,
ನೀನು ನಿಜವಾಗಿಯೂ ರೋಮಿನ ಪ್ರಜೆಯೋ?’’ ಎಂದು
ಕೇಳಿದನು.

ಪೌಲನು,‘‘ಹೌದು’’ ಎಂದು ಉತ್ತರಕೊಟ್ಟನು.

28ಸೇನಾಧಿಪತಿಯು, ‘‘ನಾನು ರೋಮಿನ ಪ್ರಜೆಯಾಗಲು
ಬಹಳ ಹಣಕೊಟ್ಟಿರುವೆ’’ ಎಂದು ಹೇಳಿದನು.

ಅದಕ್ಕೆ ಪೌಲನು, ‘‘ನಾನು ಹುಟ್ಟಿದಂದಿನಿಂದಲೇ
ರೋಮಿನ ಪ್ರಜೆ’’ ಎಂದನು.

29ಪೌಲನನ್ನು ಪ್ರಶ್ನಿಸಲು ಸಿದ್ಧರಾಗುತ್ತಿದ್ದ ಜನರು ಆ
ಕೂಡಲೇ ಪೌಲನ ಬಳಿಯಿಂದ ಹೊರಟು ಹೋದರು. ಪೌಲ
ನನ್ನು ಆಗಲೇ ಕಟ್ಟಿಹಾಕಿದ್ದರಿಂದ ಮತ್ತು ಪೌಲನು ರೋಮಿನ
ಪ್ರಜೆಯಾಗಿದ್ದರಿಂದ ಸೇನಾಧಿಪತಿಗೆ ಭಯವಾಯಿತು.

### ಪೌಲನು ಯೆಹೂದ್ಯನಾಯಕರೊಂದಿಗೆ ಮಾತಾಡುವನು

30ಮರುದಿನ, ಪೌಲನಿಗೆ ವಿರೋಧವಾಗಿ ಯೆಹೂದ್ಯರು
ತಂದ ಆಪಾದನೆ ಏನೆಂದು ತಿಳಿದುಕೊಳ್ಳಲು ಸೇನಾಧಿಪತಿಯು
ನಿರ್ಧರಿಸಿದನು. ಆದ್ದರಿಂದ ಅವನು ಮಹಾಯಾಜಕರಿಗೂ
ಯೆಹೂದ್ಯರ ನ್ಯಾಯಸಭೆಯವರಿಗೂ ಒಟ್ಟಾಗಿ ಸೇರಿಬರಲು
ಆಜ್ಞಾಪಿಸಿದನು. ಸೇನಾಧಿಪತಿಯು ಪೌಲನ ಸರಪಣಿಗಳನ್ನು
ತೆಗೆದುಹಾಕಿ ಅವನನ್ನು ಹೊರಗೆ ಕರೆದುಕೊಂಡು ಬಂದು
ಸಭೆಯ ಮುಂದೆ ನಿಲ್ಲಿಸಿದನು.

23 ಪೌಲನು ಯೆಹೂದ್ಯರ ನ್ಯಾಯಸಭೆಯನ್ನು ದೃಷ್ಟಿಸಿ
ನೋಡಿ, ‘‘ಸಹೋದರರೇ, ನಾನು ಈ ದಿನದ
ವರೆಗೂ ಒಳ್ಳೆಯ ಮನಸ್ಸಾಕ್ಷಿಯಿಂದ ದೇವರ ಮುಂದೆ
ನಡೆದುಕೊಂಡಿದ್ದೇನೆ’’ ಎಂದು ಹೇಳಿದನು. 2ಪ್ರಧಾನಯಾಜಕ
ನಾದ ಅನನೀಯನು ಅಲ್ಲಿದ್ದನು. ಪೌಲನು ಹೇಳಿದ್ದನ್ನು ಕೇಳಿದ
ಅನನೀಯನು ಪೌಲನ ಪಕ್ಕದಲ್ಲಿ ನಿಂತಿದ್ದವರಿಗೆ ಪೌಲನ
ಬಾಯಿಯ ಮೇಲೆ ಹೊಡೆಯಲು ಹೇಳಿದನು. 3ಪೌಲನು
ಅನನೀಯನಿಗೆ,‘‘ದೇವರು ನಿನ್ನನ್ನು ಸಹ ಹೊಡೆಯುವನು!
ಸುಣ್ಣ ಬಳಿದ ಗೋಡೆ ನೀನು! ಮೋಶೆಯ ಧರ್ಮಶಾಸ್ತ್ರಕ್ಕನು
ಸಾರವಾಗಿ ನ್ಯಾಯತೀರ್ಪು ಮಾಡಲು ಅಲ್ಲಿ ಕುಳಿತುಕೊಂಡು
ನನಗೆ ಹೊಡೆಯಲು ಅವರಿಗೆ ಹೇಳುತ್ತಿರುವೆಯಾ! ಮೋಶೆಯ
ಧರ್ಮಶಾಸ್ತ್ರಕ್ಕೆ ಅದು ವಿರುದ್ಧವಾದದ್ದು’’ ಎಂದು ಹೇಳಿದನು.

4ಪೌಲನ ಸಮೀಪದಲ್ಲಿ ನಿಂತಿದ್ದ ಜನರು ಅವನಿಗೆ,
‘‘ದೇವರ ಪ್ರಧಾನಯಾಜಕನಿಗೆ ನೀನು ಈ ರೀತಿ ಮಾತಾಡ
ಕೂಡದು! ನೀನು ಅವನಿಗೆ ಅವಮಾನ ಮಾಡುತ್ತಿರುವೆ!’’ ಎಂದು
ಹೇಳಿದರು.

5ಪೌಲನು, ‘‘ಸಹೋದರರೇ, ಈ ಮನುಷ್ಯನು ಪ್ರಧಾನ
ಯಾಜಕನೆಂದು ನನಗೆ ಗೊತ್ತಿರಲ್ಲಿಲ್ಲ. ‘ನಿಮ್ಮ ಜನನಾಯಕರ
ಬಗ್ಗೆ ಕೆಟ್ಟಮಾತುಗಳನ್ನು ಆಡಬಾರದು’* ಎಂದು ಧರ್ಮಶಾಸ್ತ್ರ
ದಲ್ಲಿ ಬರೆದಿದೆ’’ ಎಂದು ಹೇಳಿದನು.

6ಸಭೆಯಲ್ಲಿದ್ದ ಜನರಲ್ಲಿ ಕೆಲವರು ಸದ್ದುಕಾಯರಾಗಿದ್ದರು;
ಮತ್ತೆ ಕೆಲವರು ಫರಿಸಾಯರಾಗಿದ್ದರು. ಆದ್ದರಿಂದ ಪೌಲನು,
‘‘ನನ್ನ ಸಹೋದರರೇ, ನಾನು ಫರಿಸಾಯನು! ನನ್ನ ತಂದೆಯೂ
ಫರಿಸಾಯನಾಗಿದ್ದನು! ಸತ್ತವರು ಪುನರುತ್ಥಾನ ಹೊಂದು
ತ್ತಾರೆಂದು ನಾನು ನಂಬುವುದರಿಂದ ಇಲ್ಲಿ ನ್ಯಾಯವಿಚಾರಣೆಗೆ
ಗುರಿಯಾಗಿದ್ದೇನೆ!’’ ಎಂದು ಕೂಗಿಹೇಳಿದನು.

7ಪೌಲನು ಹೀಗೆ ಹೇಳಿದಾಗ, ಫರಿಸಾಯರಿಗೂ ಸದ್ದು
ಕಾಯರಿಗೂ ದೊಡ್ಡ ವಾಗ್ವಾದವಾಯಿತು. ಸಭೆಯಲ್ಲಿ ಭೇದ
ಉಂಟಾಯಿತು.

8(ಸತ್ತವರಿಗೆ ಪುನರುತ್ಥಾನವಿಲ್ಲ; ದೇವದೂತರುಗಳಾಗಲಿ
ಆತ್ಮಗಳಾಗಲಿ ಇಲ್ಲವೇ ಇಲ್ಲ ಎಂಬುದು ಸದ್ದುಕಾಯರ ನಂಬಿಕೆ.
ಫರಿಸಾಯರ ನಂಬಿಕೆ ಇದಕ್ಕೆ ತದ್ವಿರುದ್ಧವಾಗಿದೆ) 9ಈ
ಯೆಹೂದ್ಯರೆಲ್ಲರೂ ಹೆಚ್ಚುಹೆಚ್ಚು ಗಟ್ಟಿಯಾಗಿ ಆರ್ಭಟಿಸ
ತೊಡಗಿದರು. ಫರಿಸಾಯರ ಗುಂಪಿಗೆ ಸೇರಿದ್ದ ಕೆಲವು ಮಂದಿ
ಧರ್ಮೋಪದೇಶಕರು ಎದ್ದು ನಿಂತುಕೊಂಡು, ‘‘ಈ ಮನುಷ್ಯ
ನಲ್ಲಿ ನಮಗೇನೂ ತಪ್ಪು ಕಂಡುಬರುತ್ತಿಲ್ಲ! ದಮಸ್ಕಕ್ಕೆ ಹೋಗುವ
ದಾರಿಯಲ್ಲಿ ದೇವದೂತನಾಗಲಿ ಆತ್ಮವಾಗಲಿ ಅವನೊಂದಿಗೆ
ಮಾತಾಡಿದ್ದಿರಬೇಕು!’’ ಎಂದು ವಾದಿಸಿದರು.

10ಈ ವಾಗ್ವಾದವು ಜಗಳವಾಯಿತು. ಯೆಹೂದ್ಯರು ಪೌಲ
ನನ್ನು ಚೂರುಚೂರು ಮಾಡುವರೆಂಬ ಭಯದಿಂದ ಸೇನಾಧಿ
ಪತಿಯು ಸಿಪಾಯಿಗಳಿಗೆ, ‘‘ಕೆಳಗೆ ಇಳಿದು ಹೋಗಿ ಪೌಲ ನನ್ನು
ಯೆಹೂದ್ಯರ ಬಳಿಯಿಂದ ಕೊಂಡೊಯ್ದು ಸೈನ್ಯದ ಕೋಟೆ
ಯೊಳಗೆ ಇರಿಸಿರಿ’’ ಎಂದು ಆಜ್ಞಾಪಿಸಿದನು.

11ಮರುದಿನ ರಾತ್ರಿ ಪ್ರಭು ಯೇಸುವು ಬಂದು ಪೌಲನ
ಬಳಿ ನಿಂತುಕೊಂಡು, ‘‘ಧೈರ್ಯದಿಂದಿರು! ನೀನು ನನ್ನ ಬಗ್ಗೆ
ಜೆರುಸಲೇಮಿನ ಜನರಿಗೆ ತಿಳಿಸಿರುವೆ. ನೀನು ರೋಮಿಗೂ
ಹೋಗಿ ಅಲ್ಲಿರುವ ಜನರಿಗೆ ನನ್ನ ಬಗ್ಗೆ ತಿಳಿಸಬೇಕು!’’ ಎಂದು
ಹೇಳಿದನು.

12ಮರುದಿನ ಮುಂಜಾನೆ ಯೆಹೂದ್ಯರಲ್ಲಿ ಕೆಲವರು, ತಾವು
ಪೌಲನನ್ನು ಕೊಲ್ಲದ ಹೊರತು ಏನನ್ನೂ ತಿನ್ನುವುದಿಲ್ಲ ಮತ್ತು
ಏನನ್ನೂ ಕುಡಿಯುವುದಿಲ್ಲ ಎಂಬುದಾಗಿ ಹರಕೆ ಮಾಡಿ
ಕೊಂಡರು. 13ಹೀಗೆ ಸುಮಾರು ನಲವತ್ತಕ್ಕಿಂತಲೂ ಹೆಚ್ಚು
ಮಂದಿ ಹರಕೆ ಮಾಡಿಕೊಂಡಿದ್ದರು. 14ಈ ಯೆಹೂದ್ಯರು
ಮಹಾಯಾಜಕರ ಮತ್ತು ಯೆಹೂದ್ಯರ ಹಿರಿಯ ನಾಯಕರ
ಬಳಿಗೆ ಹೋಗಿ, ‘‘ನಾವು ಪೌಲನನ್ನು ಕೊಲ್ಲುವ ತನಕ
ತಿನ್ನುವುದೂ ಇಲ್ಲ ಕುಡಿಯುವುದೂ ಇಲ್ಲ ಎಂಬ ಕಠಿಣವಾದ
ಹರಕೆಮಾಡಿಕೊಂಡಿದ್ದೇವೆ! 15ಆದ್ದರಿಂದ ಈಗ ನೀವು ಮಾಡ
ಬೇಕಾದದ್ದೇನಂದರೆ, ಸೇನಾಧಿಪತಿಗೂ ಎಲ್ಲಾ ಯೆಹೂದ್ಯ
ನಾಯಕರಿಗೂ ಒಂದು ಸಂದೇಶವನ್ನು ಕಳುಹಿಸಿಕೊಡಿರಿ. ಪೌಲ
ನಿಗೆ ಇನ್ನೂ ಹೆಚ್ಚು ಪ್ರಶ್ನೆಗಳನ್ನು ಕೇಳಬೇಕಾಗಿರುವುದರಿಂದ
ಪೌಲನನ್ನು ನಮ್ಮ ಬಳಿಗೆ ಕರೆದುಕೊಂಡು ಬರಬೇಕೆಂದು
ಸೇನಾಧಿಪತಿಗೆ ತಿಳಿಸಿರಿ. ಪೌಲನು ಇಲ್ಲಿಗೆ ಬರುತ್ತಿರುವಾಗಲೇ
ನಾವು ಮಾರ್ಗದಲ್ಲಿ ಕಾದುಕೊಂಡಿದ್ದು ಅವನನ್ನು ಕೊಲ್ಲು
ತ್ತೇವೆ’’ ಎಂದು ಹೇಳಿದರು.

16ಆದರೆ ಈ ಯೋಜನೆಯ ಬಗ್ಗೆ ಪೌಲನ ಸೋದ
ರಳಿಯನಿಗೆ ತಿಳಿಯಿತು. ಅವನು ಸೈನ್ಯದ ಕೋಟೆಯೊಳಗೆ
ಹೋಗಿ ಈ ಯೋಜನೆಯ ಬಗ್ಗೆ ಪೌಲನಿಗೆ ತಿಳಿಸಿದನು. 17ಆಗ
ಪೌಲನು ಸೇನಾಧಿಕಾರಿಗಳಲ್ಲಿ ಒಬ್ಬನನ್ನು ಕರೆದು, ‘‘ಈ
ಯೌವನಸ್ಥನನ್ನು ಸೇನಾಧಿಪತಿಯ ಬಳಿಗೆ ಕರೆದುಕೊಂಡು
ಹೋಗು. ಇವನು ಒಂದು ಸಂದೇಶವನ್ನು ಅವನಿಗೆ ತಿಳಿಸ
ಬೇಕಾಗಿದೆ’’ ಎಂದು ಹೇಳಿದನು. 18ಆದ್ದರಿಂದ ಸೇನಾಧಿ
ಕಾರಿಯು ಪೌಲನ ಸೋದರಳಿಯನನ್ನು ಸೇನಾಧಿಪತಿಯ
ಬಳಿಗೆ ಕರೆದುಕೊಂಡು ಹೋದನು. ಆ ಅಧಿಕಾರಿಯು ಸೇನಾ
ಧಿಪತಿಗೆ, ‘‘ಈ ಯೌವನಸ್ಥನನ್ನು ನಿನ್ನ ಬಳಿಗೆ ಕರೆದುಕೊಂಡು
ಹೋಗಬೇಕೆಂದು ಸೆರೆವಾಸದಲ್ಲಿರುವ ಪೌಲನು ನನ್ನನ್ನು
ಕೇಳಿಕೊಂಡನು. ಇವನು ನಿನಗೊಂದು ಸಂದೇಶವನ್ನು ತಿಳಿಸ
ಬೇಕೆಂದಿದ್ದಾನೆ’’ ಎಂದು ಹೇಳಿದನು.

19ಸೇನಾಧಿಪತಿಯು ಆ ಯೌವನಸ್ಥನನ್ನು ಕೈಹಿಡಿದು
ಏಕಾಂತವಾದ ಸ್ಥಳಕ್ಕೆ ಕರೆದುಕೊಂಡು ಹೋಗಿ, ‘‘ನೀನು ಏನು
ತಿಳಿಸಬೇಕೆಂದಿರುವೆ?’’ ಎಂದು ಕೇಳಿದನು.

20ಆ ಯೌವನಸ್ಥನು,‘‘ಇನ್ನೂ ಹೆಚ್ಚಿನ ಪ್ರಶ್ನೆಗಳನ್ನು ಕೇಳ
ಬೇಕೆಂಬ ನೆವವನ್ನು ಅವನಿಗೆ ಹೇಳಿ ನಾಳಿನ ಆಲೋಚನಾಸಭೆಗೆ
ಪೌಲನನ್ನು ಕರೆದುಕೊಂಡು ಬರಬೇಕೆಂದು ಯೆಹೂದ್ಯರು
ನಿನ್ನನ್ನು ಕೇಳಿಕೊಳ್ಳಲು ನಿರ್ಧರಿಸಿದ್ದಾರೆ. 21ಆದರೆ ಅವರನ್ನು
ನಂಬಬೇಡ! ಪೌಲನನ್ನು ಕೊಲ್ಲುವುದಕ್ಕಾಗಿ ನಲವತ್ತಕ್ಕಿಂತಲೂ
ಹೆಚ್ಚು ಮಂದಿ ಯೆಹೂದ್ಯರು ಅಡಗಿಕೊಂಡು ಕಾಯುತ್ತಿದ್ದಾರೆ.
ಪೌಲನನ್ನು ಕೊಲ್ಲುವ ತನಕ ತಿನ್ನುವುದೂ ಇಲ್ಲ ಕುಡಿಯು
ವುದೂ ಇಲ್ಲ ಎಂದು ಅವರೆಲ್ಲರೂ ಹರಕೆ ಮಾಡಿಕೊಂಡಿದ್ದಾರೆ!
ಈಗ ಅವರು ನಿನ್ನ ಒಪ್ಪಿಗೆಗಾಗಿ ಕಾಯುತ್ತಿದ್ದಾರೆ’’ ಎಂದು
ಹೇಳಿದನು.

22ಸೇನಾಧಿಪತಿಯು ಯೌವನಸ್ಥನಿಗೆ, ‘‘ಅವರ
ಯೋಜನೆಯ ಬಗ್ಗೆ ನೀನು ನನಗೆ ಹೇಳಿರುವುದಾಗಿ ಯಾರಿಗೂ
ತಿಳಿಸಬೇಡ’’ ಎಂದು ಹೇಳಿ ಅವನನ್ನು ಕಳುಹಿಸಿಬಿಟ್ಟನು.

---

**ನಿಮ್ಮ… ಆಡಬಾರದು** ವಿಮೋಚನ. 22:28.

### ಪೌಲನನ್ನು ಸೆಜರೇಯಕ್ಕೆ ಕಳುಹಿಸಲಾಯಿತು

23ಬಳಿಕ ಸೇನಾಧಿಪತಿಯು ಇಬ್ಬರು ಸೇನಾಧಿಕಾರಿಗಳನ್ನು
ಕರೆದು ಅವರಿಗೆ, ‘‘ಸೆಜರೇಯಕ್ಕೆ ಕಳುಹಿಸಿಕೊಡಲು ಇನ್ನೂರು
ಮಂದಿ ಸೈನಿಕರನ್ನು ಸಿದ್ಧಪಡಿಸು. ಅಲ್ಲದೆ ಎಪ್ಪತ್ತು ಮಂದಿಯ
ಅಶ್ವದಳವನ್ನೂ ಇನ್ನೂರು ಮಂದಿ ಭಲ್ಲೆಯವರನ್ನೂ ಸಿದ್ಧ
ಪಡಿಸು. ಈ ರಾತ್ರಿ ಒಂಭತ್ತು ಗಂಟೆಗೆ ಇಲ್ಲಿಂದ ಹೊರಡಲು
ನೀವು ಸಿದ್ಧರಾಗಿರಬೇಕು. 24ಪೌಲನ ಪ್ರಯಾಣಕ್ಕಾಗಿ ಕೆಲವು
ಕುದುರೆಗಳನ್ನು ತೆಗೆದುಕೊ. ರಾಜ್ಯಪಾಲನಾದ ಫೇಲಿಕ್ಸನ
ಬಳಿಗೆ ಅವನನ್ನು ಸುರಕ್ಷಿತವಾಗಿ ಕೊಂಡೊಯ್ಯಲೇಬೇಕು’’
ಎಂದು ಹೇಳಿದನು. 25ಸೇನಾಧಿಪತಿಯು ಒಂದು ಪತ್ರವನ್ನೂ
ಬರೆದನು. ಅದರಲ್ಲಿ ಹೀಗೆ ತಿಳಿಸಲಾಗಿತ್ತು:

26ಕ್ಲಾಡಿಯ ಲೂಸಿಯನಿಂದ ಮಹಾರಾಜಶ್ರೀಗಳಾದ
ರಾಜ್ಯಪಾಲ ಫೇಲಿಕ್ಸನಿಗೆ, ವಂದನೆಗಳು.

27ಯೆಹೂದ್ಯರು ಈ ಮನುಷ್ಯನನ್ನು ಹಿಡಿದು ಕೊಲ್ಲುವು
ದರಲ್ಲಿದ್ದರು. ಆದರೆ ಇವನು ರೋಮ್‌ನ ಪ್ರಜೆ
ಯೆಂಬುದು ನನಗೆ ತಿಳಿಯಿತು. ಆದ್ದರಿಂದ ನಾನು ಸೈನಿಕ
ರೊಂದಿಗೆ ಹೋಗಿ ಇವನನ್ನು ಕಾಪಾಡಿದೆನು. 28ಅವರು
ಇವನ ಮೇಲೆ ಹೊರಿಸುತ್ತಿರುವ ಆಪಾದನೆಗಳಿಗೆ ಕಾರಣ
ವನ್ನು ತಿಳಿದುಕೊಳ್ಳಲು ನಾನು ನ್ಯಾಯಾಸಭೆಯ ಮುಂದೆ
ನಿಲ್ಲಿಸಿದೆ. 29ಅಲ್ಲಿ ನನಗೆ ತಿಳಿದು ಬಂದದ್ದೇನೆಂದರೆ,
ಪೌಲನು ದುಷ್ಕಾರ್ಯಗಳನ್ನು ಮಾಡಿದ್ದಾನೆಂದು
ಯೆಹೂದ್ಯರು ಹೇಳಿದರೂ ಅವರ ಆಪಾದನೆಗಳು ಅವರ
ಸ್ವಂತ ಯೆಹೂದ್ಯಧರ್ಮಶಾಸ್ತ್ರಕ್ಕೆ ಸಂಬಂಧಪಟ್ಟ
ದ್ದಾಗಿದ್ದವು. ಅಲ್ಲದೆ ಇವನನ್ನು ಸೆರೆಮನೆಗಾಗಲಿ
ಮರಣದಂಡನೆಗಾಗಲಿ ಗುರಿಪಡಿಸಬಹುದಾದ ಯಾವ
ಅಪರಾಧವೂ ಇರಲಿಲ್ಲ. 30 ಆದರೆ ಯೆಹೂದ್ಯರಲ್ಲಿ
ಕೆಲವರು ಪೌಲನನ್ನು ಕೊಲ್ಲಲು ಯೋಜನೆ ಮಾಡು
ತ್ತಿರುವುದು ನನಗೆ ತಿಳಿಯಿತು. ಆದ್ದರಿಂದ ನಾನು
ಅವನನ್ನು ನಿನ್ನ ಬಳಿಗೆ ಕಳುಹಿಸಿದ್ದೇನೆ. ಅಲ್ಲದೆ ಅವನ
ಮೇಲಿರುವ ದೂರುಗಳನ್ನು ನಿನಗೆ ತಿಳಿಸಬೇಕೆಂದು
ನಾನು ಆಪಾದಕರಿಗೂ ಸಹ ತಿಳಿಸಿದ್ದೇನೆ.

31ಸೇನಾಧಿಪತಿಯ ಆಜ್ಞೆಗನುಸಾರವಾಗಿ ಸೈನಿಕರು ಕಾರ್ಯ
ವೆಸಗಿದರು. ಆ ರಾತ್ರಿ ಸೈನಿಕರು ಪೌಲನನ್ನು ಅಂತಿಪತ್ರಿಯ ಎಂಬ
ಪಟ್ಟಣಕ್ಕೆ ಕರೆದುಕೊಂಡು ಹೋದರು. 32ಮರುದಿನ ಅಶ್ವದಳ
ದವರು ಪೌಲನೊಂದಿಗೆ ಸೆಜರೇಯ ಪಟ್ಟಣಕ್ಕೆ ಹೋದರು.
ಆದರೆ ಉಳಿದ ಸೈನಿಕರು ಮತ್ತು ಭರ್ಜಿದಾರರು ಜೆರುಸಲೇಮಿನ
ಸೈನ್ಯದ ಕೋಟೆಗೆ ಹಿಂತಿರುಗಿದರು. 33ಅಶ್ವದಳದವರು
ಸೆಜರೇಯ ಪಟ್ಟಣವನ್ನು ಪ್ರವೇಶಿಸಿ, ರಾಜ್ಯಪಾಲನಾದ ಫೇಲಿಕ್ಸ
ನಿಗೆ ಪತ್ರವನ್ನು ಕೊಟ್ಟರು. ಬಳಿಕ ಅವರು ಪೌಲನನ್ನು ಅವನಿಗೆ
ಒಪ್ಪಿಸಿದರು. 34ರಾಜ್ಯಪಾಲನು ಪತ್ರವನ್ನು ಓದಿದನು. ಬಳಿಕ
ಅವನು ಪೌಲನಿಗೆ, ‘‘ನೀನು ಯಾವ ದೇಶದವನು?’’ ಎಂದು
ಕೇಳಿದಾಗ, ಸಿಲಿಸಿಯದವನೆಂಬುದು ತಿಳಿಯಿತು. 35ರಾಜ್ಯ
ಪಾಲನು, ‘‘ನಿನಗೆ ವಿರೋಧವಾಗಿರುವ ಯೆಹೂದ್ಯರು ಇಲ್ಲಿಗೆ
ಬಂದಾಗ, ನಾನು ನಿನ್ನ ವಿಚಾರಣೆ ಮಾಡುತ್ತೇನೆ’’ ಎಂದು
ಹೇಳಿದನು. ಬಳಿಕ ರಾಜ್ಯಪಾಲನು ಪೌಲನನ್ನು ಅರಮನೆ
ಯೊಳಗೆ ಇರಿಸಬೇಕೆಂದು ಆಜ್ಞಾಪಿಸಿದನು. (ಈ ಕಟ್ಟಡವನ್ನು
ಹೆರೋದನು ಕಟ್ಟಿಸಿದ್ದನು.)

### ಪೌಲನ ಮೇಲೆ ಯೆಹೂದ್ಯರ ದೋಷಾರೋಪಣೆ

24 ಐದು ದಿನಗಳನಂತರ, ಪ್ರಧಾನಯಾಜಕ ಅನ
ನೀಯನು ಯೆಹೂದ್ಯರ ಹಿರೀ ನಾಯಕರಲ್ಲಿ ಕೆಲ
ವರನ್ನು ಮತ್ತು ತೆರ್ತುಲ್ಲ ಎಂಬ ವಕೀಲನನ್ನು ಕರೆದುಕೊಂಡು
ರಾಜ್ಯಪಾಲನ ಎದುರಿನಲ್ಲಿ ಪೌಲನ ಮೇಲೆ ದೋಷಾರೋಪಣೆ
ಮಾಡಲು ಸೆಜರೇಯ ಪಟ್ಟಣಕ್ಕೆ ಹೋದನು. 2ಪೌಲನನ್ನು
ಸಭೆಗೆ ಕರೆಸಲಾಯಿತು. ಆಗ ತೆರ್ತುಲ್ಲನು ತನ್ನ ಆಪಾದನೆ
ಗಳನ್ನು ಹೊರಿಸಲಾರಂಭಿಸಿದನು:
‘‘ಮಹಾರಾಜಶ್ರೀಗಳಾದ ಫೇಲಿಕ್ಸನೇ, ನಿನ್ನ ದೆಸೆ
ಯಿಂದಾಗಿ ನಮ್ಮ ಜನರು ಶಾಂತಿಯಿಂದ ಜೀವಿಸುತ್ತಿದ್ದಾರೆ. ನಿನ್ನ
ವಿವೇಕದ ಸಹಾಯದಿಂದ ನಮ್ಮ ದೇಶದ ಅನೇಕ ದೋಷ
ಗಳನ್ನು ಸರಿಪಡಿಸಿ ಸುಧಾರಣೆಗಳನ್ನು ಮಾಡಲಾಗಿದೆ. 3ನಾವು
ಇವುಗಳನ್ನು ಬಹು ಕೃತಜ್ಞತೆಯಿಂದ ಎಲ್ಲಾ ಸ್ಥಳಗಳಲ್ಲಿ ಯಾವಾ
ಗಲೂ ಒಪ್ಪಿಕೊಳ್ಳುತ್ತೇವೆ. 4ಆದರೆ ನಾನು ನಿನ್ನ ಸಮಯವನ್ನು
ಇನ್ನೂ ಹೆಚ್ಚಿಗೆ ತೆಗೆದುಕೊಳ್ಳಬಯಸದೆ, ಕೆಲವೇ ಮಾತುಗಳಲ್ಲಿ
ಹೇಳುವೆ. ದಯವಿಟ್ಟು ತಾಳ್ಮೆಯಿಂದಿರು. 5ಈ ಮನುಷ್ಯನು
(ಪೌಲನು) ಗಲಭೆ ಮಾಡುತ್ತಿದ್ದಾನೆ. ಯೆಹೂದ್ಯರು ಜಗತ್ತಿನಲ್ಲಿ
ಎಲ್ಲೇ ಇರಲಿ, ಅಲ್ಲೆಲ್ಲಾ ಇವನು ಗಲಭೆಯನ್ನು ಎಬ್ಬಿಸುತ್ತಾನೆ.
ಇವನು ‘ನಜರೇನ’ ಪಂಗಡದ ನಾಯಕನಾಗಿದ್ದಾನೆ. 6ಅಲ್ಲದೆ,
ಇವನು ದೇವಾಲಯವನ್ನು ಅಶುದ್ಧಗೊಳಿಸಲು ಪ್ರಯತ್ನಿ
ಸಿದನು, ಆದರೆ ನಾವು ಇವನನ್ನು ತಡೆದೆವು.* 8ಸ್ವತಃ ನೀನೇ
ಇವನಿಗೆ ಕೆಲವು ಪ್ರಶ್ನೆಗಳನ್ನು ಕೇಳು. ಆಗ ಈ ಸಂಗತಿಗಳೆಲ್ಲಾ
ಸತ್ಯವಾಗಿವೆಯೋ ಇಲ್ಲವೋ ಎಂದು ನಿರ್ಣಯಿಸಲು ನಿನಗೆ
ಸಾಧ್ಯವಾಗುವುದು.’’ 9ಉಳಿದ ಯೆಹೂದ್ಯರು, ‘‘ಈ ಸಂಗತಿ
ಗಳು ನಿಜವಾಗಿಯೂ ಸತ್ಯವಾದುವುಗಳು!’’ ಎಂದರು.
10ರಾಜ್ಯಪಾಲನು ಪೌಲನಿಗೆ ಸನ್ನೆ ಮಾಡಿ, ಮಾತಾಡಲು
ಸೂಚಿಸಿದನು. ಆಗ ಪೌಲನು ಇಂತೆಂದನು: ‘‘ರಾಜ್ಯಪಾಲನಾದ
ಫೇಲಿಕ್ಸನೇ, ನೀನು ಅನೇಕ ವರ್ಷಗಳಿಂದ ಈ ದೇಶಕ್ಕೆ
ನ್ಯಾಯಾಧೀಶನಾಗಿರುವುದು ನನಗೆ ಗೊತ್ತಿದೆ. ಆದ್ದರಿಂದ
ಸಂತೋಷದಿಂದ ನಿನ್ನ ಮುಂದೆ ನನ್ನನ್ನು ಪ್ರತಿಪಾದಿಸಿಕೊಳ್ಳು
ವೆನು. 11ನಾನು ಆರಾಧನೆಗೋಸ್ಕರ ಜೆರುಸಲೇಮಿಗೆ
ಹೋದದ್ದು ಕೇವಲ ಹನ್ನೆರಡು ದಿನಗಳ ಹಿಂದೆಯಷ್ಟೇ. ಅದು
ಸತ್ಯವೆಂದು ಸ್ವತಃ ನೀನೇ ತಿಳಿದುಕೊಳ್ಳಬಲ್ಲೆ. 12ನಾನು ದೇವಾ
ಲಯದಲ್ಲಾಗಲಿ ಸಭಾಮಂದಿರಗಳಲ್ಲಾಗಲಿ, ಪಟ್ಟಣದಲ್ಲಾಗಲಿ
ಯಾರೊಂದಿಗಾದರೂ ವಾದ ಮಾಡುತ್ತಿರುವುದನ್ನು ಇಲ್ಲವೆ
ಜನರ ಗುಂಪುಕೂಡಿಸುವುದನ್ನು ಇವರು ನೋಡಿಲ್ಲ. 13ಈಗ
ನನಗೆ ವಿರೋಧವಾಗಿ ಹೇಳುತ್ತಿರುವ ಸಂಗತಿಗಳನ್ನು ಈ
ಯೆಹೂದ್ಯರು ನಿರೂಪಿಸಲಾರರು. 14ಆದರೆ ನಾನು ನಿನಗೆ

---

**ವಚನ 6–8** ಕೆಲವು ಗ್ರೀಕ್ ಪ್ರತಿಗಳಲ್ಲಿ ಈ ವಾಕ್ಯಗಳನ್ನು ಸೇರಿಸಲಾಗಿದೆ: ವಚನ 7 ಆದರೆ ಅಧಿಕಾರಿಯಾದ ಲೂಸಿಯನು ಬಂದು ಹೆಚ್ಚು ಬಲ ಪ್ರಯೋಗ ಮಾಡಿ ಅವನನ್ನು ನಮ್ಮ ಬಳಿಯಿಂದ ಕೊಂಡೊಯ್ದನು, ಮತ್ತು ನಿನ್ನ ಬಳಿಗೆ ಬಂದು ನಮ್ಮ ಮೇಲೆ ದೂರು ಹೇಳುವಂತೆ ಲೂಸಿಯನು ತನ್ನ ಜನರಿಗೆ ಆಜ್ಞಾಪಿಸಿದ್ದಾನೆ.

ಹೇಳುವುದೇನೆಂದರೆ, ಯೇಸುವಿನ ಮಾರ್ಗದ ಹಿಂಬಾಲಕನಾದ
ನಾನು ನಮ್ಮ ಪಿತೃಗಳ ದೇವರನ್ನು ಆರಾಧಿಸುತ್ತೇನೆ. ಯೇಸುವಿನ
ಮಾರ್ಗವು ಸರಿಯಲ್ಲವೆಂದು ಯೆಹೂದ್ಯರು ಹೇಳುತ್ತಾರೆ.
ಆದರೆ ಮೋಶೆಯ ಧರ್ಮಶಾಸ್ತ್ರದಲ್ಲಿಯೂ ಪ್ರವಾದಿಗಳ ಪುಸ್ತಕ
ಗಳಲ್ಲಿಯೂ ಬರೆದಿರುವ ಪ್ರತಿಯೊಂದನ್ನು ನಾನು ನಂಬುತ್ತೇನೆ.
15ಈ ಯೆಹೂದ್ಯರಿಗೆ ದೇವರಲ್ಲಿ ಯಾವ ನಿರೀಕ್ಷೆಯಿದೆಯೋ
ಅದೇ ನಿರೀಕ್ಷೆ ನನಗೂ ಇದೆ. ನೀತಿವಂತರಿಗೂ ಅನೀತಿವಂತ
ರಿಗೂ ಪುನರುತ್ಥಾನವಾಗುತ್ತದೆ ಎಂಬುದೇ ಆ ನಿರೀಕ್ಷೆ. 16ಈ
ಕಾರಣದಿಂದ ನಾನು ಯಾವುದನ್ನು ಸರಿಯಾದದ್ದು ಎಂದು
ನಂಬಿದ್ದೇನೊ ಅದನ್ನು ದೇವರ ಮುಂದೆಯೂ ಮನುಷ್ಯರ
ಮುಂದೆಯೂ ಮಾಡಲು ಯಾವಾಗಲು ಪ್ರಯತ್ನಿಸುತ್ತಿದ್ದೇನೆ.

17“ನಾನು ಅನೇಕ ವರ್ಷಗಳಿಂದ ಜೆರುಸಲೇಮಿನಲ್ಲಿ
ಇರಲಿಲ್ಲ. ಬಳಿಕ ನಾನು ನನ್ನ ಜನರಿಗಾಗಿ ಹಣವನ್ನು ತರುವುದ
ಕ್ಕಾಗಿಯೂ ಉಡುಗೊರೆಗಳನ್ನು ಕೊಡುವುದಕ್ಕಾಗಿಯೂ
ಜೆರುಸಲೇಮಿಗೆ ಮರಳಿ ಹೋದೆನು. 18ನಾನು ಈ ಕಾರ್ಯದಲ್ಲಿ
ನಿರತನಾಗಿದ್ದಾಗ ಕೆಲವು ಮಂದಿ ಯೆಹೂದ್ಯರು ನನ್ನನ್ನು
ದೇವಾಲಯದಲ್ಲಿ ಕಂಡರು. ನಾನು ಶುದ್ಧಾಚಾರದ ವಿಧಿಯನ್ನು
ಮುಗಿಸಿದ್ದೆನು. ನಾನು ಯಾವ ಗಲಭೆಯನ್ನೂ ಮಾಡಿರಲಿಲ್ಲ.
ನನ್ನ ಸುತ್ತಲೂ ಯಾವ ಜನರೂ ಇರಲಿಲ್ಲ. 19ಆದರೆ ಏಷ್ಯಾದ
ಕೆಲವು ಮಂದಿ ಯೆಹೂದ್ಯರು ಅಲ್ಲಿದ್ದರು. ಅವರು ಈಗ ನಿನ್ನೆದು
ರಿನಲ್ಲಿ ಇರಬೇಕಿತ್ತು. ನಾನು ನಿಜವಾಗಿ ಏನಾದರೂ ತಪ್ಪು
ಮಾಡಿದ್ದರೆ ಏಷ್ಯಾದ ಆ ಯೆಹೂದ್ಯರೇ ನನ್ನ ಮೇಲೆ ದೋಷಾ
ರೋಪಣೆ ಮಾಡಬೇಕಿತ್ತು. 20ನಾನು ಜೆರುಸಲೇಮಿನಲ್ಲಿ
ಯೆಹೂದ್ಯ ನ್ಯಾಯಸಭೆಯ ಮುಂದೆ ನಿಂತಿದ್ದಾಗ, ನನ್ನಲ್ಲಿ
ಅವರಿಗೆ ಯಾವ ಅಪರಾಧಗಳು ಕಂಡುಬಂದವೆಂದು ಇಲ್ಲಿರುವ
ಈ ಯೆಹೂದ್ಯರನ್ನೇ ಕೇಳು. 21ನಾನು ಅವರ ಮುಂದೆ ನಿಂತಿ
ದ್ದಾಗ, ‘ಸತ್ತವರು ಪುನರುತ್ಥಾನ ಹೊಂದುತ್ತಾರೆಂದು ನಾನು
ನಂಬುವುದರಿಂದ ಇಲ್ಲಿ ನ್ಯಾಯವಿಚಾರಣೆಗೆ ಗುರಿಯಾಗಿದ್ದೇನೆ!
ಎಂಬ ಒಂದೇ ಒಂದು ಸಂಗತಿಯನ್ನು ನಾನು ಕೂಗಿಹೇಳಿದೆ.”

22ಫೇಲಿಕ್ಸನು ಯೇಸುವಿನ ಮಾರ್ಗದ ಬಗ್ಗೆ ಮೊದಲೇ
ಸಾಕಷ್ಟು ಅರ್ಥಮಾಡಿಕೊಂಡಿದ್ದನು. ಅವನು ವಿಚಾರಣೆಯನ್ನು
ನಿಲ್ಲಿಸಿ, “ಸೇನಾಧಿಪತಿಯಾದ ಲೂಸಿಯನು ಇಲ್ಲಿಗೆ ಬಂದಾಗ,
ಈ ಸಂಗತಿಗಳ ಬಗ್ಗೆ ನಾನು ತೀರ್ಪನ್ನು ಕೊಡುತ್ತೇನೆ” ಎಂದು
ಹೇಳಿದನು. 23ಪೌಲನನ್ನು ಕಾವಲಿನಲ್ಲಿರಿಸಬೇಕೆಂದು ಫೇಲಿ
ಕ್ಸನು ಸೇನಾಧಿಕಾರಿಗೆ ತಿಳಿಸಿದನು. ಆದರೆ ಪೌಲನಿಗೆ ಸ್ವಲ್ಪ
ಸ್ವತಂತ್ರವನ್ನು ಕೊಡುವಂತೆಯೂ ಪೌಲನ ಮಿತ್ರರು ಅವನಿಗೆ
ಅಗತ್ಯವಾದ ವಸ್ತುಗಳನ್ನು ತಂದುಕೊಡುವುದಕ್ಕೆ ಅವಕಾಶಕೊಡ
ಬೇಕೆಂತಲೂ ಅವನು ಅಧಿಕಾರಿಗೆ ಹೇಳಿದನು.

### ಫೇಲಿಕ್ಸ ಮತ್ತು ಅವನ ಪತ್ನಿಯ ಮುಂದೆ ಪೌಲನು

24ಕೆಲವು ದಿನಗಳಾದ ಮೇಲೆ ಫೇಲಿಕ್ಸನು ತನ್ನ ಹೆಂಡತಿ
ಯಾದ ದ್ರೂಸಿಲ್ಲಳೊಂದಿಗೆ ಬಂದನು. ಆಕೆ ಯೆಹೂದ್ಯಳು.
ಫೇಲಿಕ್ಸನು ಪೌಲನನ್ನು ಕರೆಯಿಸಿದನು. ಕ್ರಿಸ್ತನಾದ ಯೇಸುವಿ
ನಲ್ಲಿ ನಂಬಿಕೆ ಇಡುವುದರ ಬಗ್ಗೆ ಪೌಲನು ಹೇಳಿದ್ದನ್ನು ಅವನು
ಆಲಿಸಿದನು. 25ಆದರೆ ನೀತಿಯ ಬಾಳ್ವೆ, ಇಂದ್ರಿಯ ನಿಗ್ರಹ
ಮತ್ತು ಮುಂದೆ ಬರಲಿರುವ ನ್ಯಾಯತೀರ್ಪುಗಳ ಬಗ್ಗೆ ಪೌಲನು
ಮಾತಾಡಿದಾಗ ಅವನು ಭಯಗೊಂಡು, “ಈಗ ನೀನು
ಹೋಗು! ನನಗೆ ಹೆಚ್ಚು ಸಮಯವಿರುವಾಗ ನಿನ್ನನ್ನು ಕರೆಯಿಸು
ತ್ತೇನೆ” ಎಂದು ಹೇಳಿದನು. 26ಆದರೆ ಪೌಲನು ಲಂಚ ಕೊಡ
ಬಹುದೆಂದು ಅವನು ನಿರೀಕ್ಷಿಸಿಕೊಂಡಿದ್ದರಿಂದ ಅವನು ಅನೇಕ
ಸಲ ಪೌಲನನ್ನು ಕರೆಯಿಸಿ ಅವನೊಂದಿಗೆ ಮಾತಾಡಿದನು.

27ಆದರೆ ಎರಡು ವರ್ಷಗಳ ನಂತರ ಫೇಲಿಕ್ಸನ ಬದಲಾಗಿ
ಪೊರ್ಸಿಯ ಫೆಸ್ತನು ರಾಜ್ಯಪಾಲನಾದನು. ಆದರೆ ಫೇಲಿಕ್ಸನು
ಯೆಹೂದ್ಯರನ್ನು ಮೆಚ್ಚಿಸುವುದಕ್ಕಾಗಿ ಪೌಲನನ್ನು ಸೆರೆಮನೆ
ಯಲ್ಲಿಯೇ ಬಿಟ್ಟು ಹೋದನು.

### ಸೀಸರನನ್ನು ಕಾಣಲು ಪೌಲನು ಮಾಡಿದ ಮನವಿ

25 ಫೆಸ್ತನು ರಾಜ್ಯಪಾಲನಾಗಿ ಮೂರು ದಿನಗಳಾದ
ಮೇಲೆ ಸೆಜರೇಯದಿಂದ ಜೆರುಸಲೇಮಿಗೆ
ಹೋದನು. 2ಮಹಾಯಾಜಕರು ಮತ್ತು ಪ್ರಮುಖ ಯೆಹೂದ್ಯ
ನಾಯಕರು ಫೆಸ್ತನ ಎದುರಿನಲ್ಲಿ ಪೌಲನಿಗೆ ವಿರೋಧವಾಗಿ
ದೋಷಾರೋಪಣೆಗಳನ್ನು ಹೇಳಿದರು. 3ಅಲ್ಲದೆ ಪೌಲನನ್ನು
ಜೆರುಸಲೇಮಿಗೆ ಮರಳಿ ಕಳುಹಿಸಿಕೊಡಬೇಕೆಂದು ಅವರು
ಫೆಸ್ತನನ್ನು ಕೇಳಿಕೊಂಡರು. ಅವರು ಪೌಲನನ್ನು ಮಾರ್ಗದಲ್ಲೇ
ಕೊಲ್ಲಬೇಕೆಂಬ ಯೋಜನೆ ಮಾಡಿಕೊಂಡಿದ್ದರು. 4ಆದರೆ
ಫೆಸ್ತನು, “ಇಲ್ಲ! ಪೌಲನನ್ನು ಸೆಜರೇಯದಲ್ಲೇ ಇರಿಸಲಾಗು
ವುದು. ನಾನೇ ಅಲ್ಲಿಗೆ ಬೇಗ ಹೋಗಲಿದ್ದೇನೆ. 5ನಿಮ್ಮ ನಾಯಕ
ರಲ್ಲಿ ಕೆಲವರು ನನ್ನೊಂದಿಗೆ ಬರಲಿ. ಅವನು ನಿಜವಾಗಿಯೂ
ಅಪರಾಧ ಮಾಡಿದ್ದರೆ ಅವನ ಮೇಲೆ ಸೆಜರೇಯದಲ್ಲೇ ಅವರು
ದೋಷಾರೋಷಣೆ ಮಾಡಲಿ” ಎಂದು ಉತ್ತರ ಕೊಟ್ಟನು.

6ಫೆಸ್ತನು ಇನ್ನೂ ಎಂಟು-ಹತ್ತು ದಿನಗಳವರೆಗೆ ಜೆರುಸ
ಲೇಮಿನಲ್ಲಿ ಇದ್ದನು. ಬಳಿಕ ಅವನು ಸೆಜರೇಯಕ್ಕೆ ಹಿಂತಿ
ರುಗಿದನು. ಮರುದಿನ ಅವನು ಸೈನಿಕರಿಗೆ ಪೌಲನನ್ನು ತನ್ನ
ಮುಂದೆ ಕರೆದುಕೊಂಡು ಬರಬೇಕೆಂದು ತಿಳಿಸಿದನು. ಫೆಸ್ತನು
ನ್ಯಾಯಾಸ್ಥಾನದ ಮೇಲೆ ಕುಳಿತುಕೊಂಡಿದ್ದನು. 7ಪೌಲನು
ನ್ಯಾಯಾಲಯದೊಳಗೆ ಬಂದನು. ಜೆರುಸಲೇಮಿನಿಂದ
ಬಂದಿದ್ದ ಯೆಹೂದ್ಯರು ಅವನ ಸುತ್ತಲೂ ನಿಂತುಕೊಂಡು ಅವನ
ಮೇಲೆ ಅನೇಕ ದೋಷಾರೋಪಗಳನ್ನು ಮಾಡಿದರು. ಆದರೆ
ಅವುಗಳಲ್ಲಿ ಯಾವುದಕ್ಕೂ ಆಧಾರವಿರಲಿಲ್ಲ. 8ಪೌಲನು
ಪ್ರತಿವಾದ ಮಾಡುತ್ತಾ, “ನಾನು ಯೆಹೂದ್ಯರ ಧರ್ಮಶಾಸ್ತ್ರಕ್ಕೆ
ವಿರುದ್ಧವಾಗಲಿ ದೇವಾಲಯಕ್ಕೆ ವಿರುದ್ಧವಾಗಲಿ ಸೀಸರನಿಗೆ
ವಿರುದ್ಧವಾಗಲಿ ಯಾವ ತಪ್ಪನ್ನೂ ಮಾಡಿಲ್ಲ” ಎಂದು ಹೇಳಿ
ದನು. 9ಆದರೆ ಫೆಸ್ತನು ಯೆಹೂದ್ಯರ ಮೆಚ್ಚಿಕೆಗಳಿಸಿಕೊಳ್ಳ
ಬೇಕೆಂದಿದ್ದನು. ಆದ್ದರಿಂದ ಅವನು ಪೌಲನಿಗೆ, “ನೀನು ಜೆರುಸ
ಲೇಮಿಗೆ ಹೋಗ ಬಯಸುವೆಯಾ? ಈ ದೋಷಾರೋಪಣೆಗಳ
ಕುರಿತು ನಾನು ಅಲ್ಲಿಯೇ ನಿನಗೆ ತೀರ್ಪುಮಾಡಬೇಕೆಂದು
ಅಪೇಕ್ಷಿಸುವಿಯಾ?” ಎಂದು ಕೇಳಿದನು.

10-11ಪೌಲನು, “ಈಗ ನಾನು ಸೀಸರನ ನ್ಯಾಯಾಸ್ಥಾನದ
ಮುಂದೆ ನಿಂತಿದ್ದೇನೆ. ನನಗೆ ತೀರ್ಪಾಗಬೇಕಾದದ್ದು ಇಲ್ಲಿಯೇ!
ನಾನು ಯೆಹೂದ್ಯರಿಗೆ ಯಾವ ಅಪರಾಧವನ್ನೂ ಮಾಡಿಲ್ಲ.
ಇದು ಸತ್ಯವೆಂದು ನಿನಗೆ ಗೊತ್ತಿದೆ. ‘ನಾನು ಅಪರಾಧಿಯಾಗಿದ್ದು
ಧರ್ಮಶಾಸ್ತ್ರವು ನನಗೆ ಮರಣದಂಡನೆ ವಿಧಿಸಿದರೆ, ನಾನು ಆ
ತೀರ್ಪನ್ನು ಒಪ್ಪಿಕೊಳ್ಳುತ್ತೇನೆ. ಆದರೆ ಇವರ ದೋಷಾರೋಪಣೆ
ಗಳು ಸತ್ಯವಾಗಿಲ್ಲದಿದ್ದರೆ, ನನ್ನನ್ನು ಇವರ ಕೈಗೆ ಒಪ್ಪಿಸಲು

ಯಾರಿಗೂ ಸಾಧ್ಯವಿಲ್ಲ! ನನ್ನ ವಿಷಯವನ್ನು ಸೀಸರನೇ ಪರಿಶೀಲಿಸಲಿ!'' ಎಂದನು.

12ಫೆಸ್ತನು ತನ್ನ ಸಲಹೆಗಾರರೊಂದಿಗೆ ಇದರ ಬಗ್ಗೆ ಮಾತಾಡಿದನು. ಬಳಿಕ ಅವನು,''ನನ್ನ ವಿಷಯವನ್ನು ಸೀಸರನೇ ಪರಿಶೀಲಿಸಲಿ'' ಎಂದು ನೀನು ಕೇಳಿಕೊಂಡದ್ದರಿಂದ ನಿನ್ನನ್ನು ಸೀಸರನ ಬಳಿಗೇ ಕಳುಹಿಸಿಕೊಡುತ್ತೇನೆ'' ಎಂದನು.

## ಹೆರೋದ ಅಗ್ರಿಪ್ಪನ ಮುಂದೆ ಪೌಲನು

13ಕೆಲವು ದಿನಗಳಾದ ಮೇಲೆ ರಾಜ ಅಗ್ರಿಪ್ಪನು ಮತ್ತು ಬೆರ್ನಿಕೆರಾಣಿ ಫೆಸ್ತನನ್ನು ವಂದಿಸಲು ಸೆಜರೇಯಕ್ಕೆ ಬಂದರು. 14ಅವರು ಅಲ್ಲಿ ಅನೇಕ ದಿನಗಳವರೆಗೆ ಇದ್ದರು. ಫೆಸ್ತನು ಪೌಲನ ವ್ಯಾಜ್ಯದ ಬಗ್ಗೆ ರಾಜನಿಗೆ ಈ ರೀತಿ ತಿಳಿಸಿದನು: ''ಫೇಲಿಕ್ಸನು ಸೆರೆಮನೆಯಲ್ಲೇ ಬಿಟ್ಟುಹೋದ ಒಬ್ಬ ವ್ಯಕ್ತಿ ಇದ್ದಾನೆ. 15ನಾನು ಜೆರುಸಲೇಮಿಗೆ ಹೋಗಿದ್ದಾಗ ಮಹಾಯಾಜಕರು ಮತ್ತು ಯೆಹೂದ್ಯ ಹಿರಿಯ ನಾಯಕರು ಅವನಿಗೆ ವಿರೋಧವಾಗಿ ದೋಷಾರೋಪಣೆ ಮಾಡಿದರು. ನಾನು ಅವನಿಗೆ ಮರಣ ದಂಡನೆ ವಿಧಿಸಬೇಕೆಂಬುದು ಈ ಯೆಹೂದ್ಯರ ಅಪೇಕ್ಷೆಯಾಗಿತ್ತು. 16ಆದರೆ ನಾನು, 'ದೋಷಾರೋಪಣೆ ಹೊರಿಸಲ್ಪಟ್ಟಿರುವ ವ್ಯಕ್ತಿಯನ್ನು ತೀರ್ಪಿಗಾಗಿ ಬೇರೆಯವರಿಗೆ ಒಪ್ಪಿಸುವುದು ರೋಮ್‌ನವರ ಪದ್ಧತಿಯಲ್ಲ. ಮೊದಲನೆಯದಾಗಿ, ಅವನು ತನ್ನ ಮೇಲೆ ದೋಷಾರೋಪಣೆ ಮಾಡುತ್ತಿರುವವರನ್ನು ಮುಖಾಮುಖಿಯಾಗಿ ಸಂಧಿಸಿ ಅವರ ದೋಷಾರೋಪಣೆಗಳಿಗೆ ವಿರೋಧವಾಗಿ ತನ್ನನ್ನು ಪ್ರತಿಪಾದಿಸಿಕೊಳ್ಳಲು ಅವಕಾಶ ಕೊಡಲೇಬೇಕು' ಎಂದು ಹೇಳಿದೆನು. 17ಆದ್ದರಿಂದ ಅವರು ಇಲ್ಲಿಗೆ ಬಂದಾಗ, ನಾನು ತಡಮಾಡದೆ ಮರುದಿನವೇ ನ್ಯಾಯಾಸ್ಥಾನದಲ್ಲಿ ಕುಳಿತು ಆ ಮನುಷ್ಯನನ್ನು (ಪೌಲನನ್ನು) ಒಳಗೆ ಕರೆದುಕೊಂಡು ಬರಬೇಕೆಂದು ಆಜ್ಞಾಪಿಸಿದೆನು. 18ಯೆಹೂದ್ಯರು ನಿಂತುಕೊಂಡು ಅವನ ಮೇಲೆ ದೋಷಾರೋಪಣೆಗಳನ್ನು ಹೊರಿಸಿದರು. ಆದರೆ ನಾನು ಯೋಚಿಸಿದ ಪ್ರಕಾರ ಯೆಹೂದ್ಯರು ಅವನ ಮೇಲೆ ಯಾವ ಕೆಟ್ಟ ಅಪರಾಧವನ್ನಾಗಲಿ ಹೊರಿಸಲಿಲ್ಲ. 19ಅವರು ಹೇಳಿದ ಸಂಗತಿಗಳು ಅವರ ಸ್ವಂತ ಧರ್ಮಕ್ಕೆ ಸಂಬಂಧಪಟ್ಟದ್ದವು ಮತ್ತು ಯೇಸು ಎಂಬ ವ್ಯಕ್ತಿಯನ್ನು ಕುರಿತದ್ದಾಗಿದ್ದವು. ಸತ್ತುಹೋದ ಯೇಸು ಈಗ ಜೀವಂತವಾಗಿದ್ದಾನೆಂದು ಪೌಲನು ಹೇಳಿದನು. 20ಈ ಸಂಗತಿಗಳ ಬಗ್ಗೆ ನನಗೆ ಹೆಚ್ಚಿಗೆ ತಿಳಿದಿರಲಿಲ್ಲ. ಆದ್ದರಿಂದ ನಾನು ಪ್ರಶ್ನೆಗಳನ್ನು ಕೇಳಲಿಲ್ಲ. ಆದರೆ ನಾನು ಪೌಲನಿಗೆ, 'ನೀನು ಜೆರುಸಲೇಮಿಗೆ ಹೋಗಿ ಅಲ್ಲೇ ನ್ಯಾಯತೀರ್ಪು ಹೊಂದಲು ಬಯಸುವೆಯಾ?' ಎಂದು ಕೇಳಿದೆನು. 21ಅದಕ್ಕೆ ಅವನು, 'ಚಕ್ರವರ್ತಿಯೇ (ಸೀಸರನೇ) ನನ್ನ ವಾದವನ್ನು ತೀರ್ಮಾನಿಸಲಿ. ಅಲ್ಲಿಯವರೆಗೆ ನನ್ನನ್ನು ಸಂರಕ್ಷಿಸಬೇಕು' ಎಂದು ಕೇಳಿಕೊಂಡನು. ಆದ್ದರಿಂದ ರೋಮಿನಲ್ಲಿರುವ ಚಕ್ರವರ್ತಿಯ ಬಳಿಗೆ ಕಳುಹಿಸುವ ತನಕ ಅವನನ್ನು ಕಾವಲಿನಲ್ಲಿರಿಸಬೇಕೆಂದು ಆಜ್ಞಾಪಿಸಿದೆನು.''

22ಅಗ್ರಿಪ್ಪನು ಫೆಸ್ತನಿಗೆ, ''ಈ ಮನುಷ್ಯನು ಹೇಳುವುದನ್ನು ಕೇಳುವುದಕ್ಕೆ ನನಗೂ ಇಷ್ಟವಿದೆ'' ಎಂದು ಹೇಳಿದನು.

ಫೆಸ್ತನು, ''ಅವನು ಹೇಳುವುದನ್ನು ನೀನು ನಾಳೆ ಕೇಳಬಹುದು!'' ಎಂದು ಹೇಳಿದನು.

23ಮರುದಿನ ಅಗ್ರಿಪ್ಪ ರಾಜ ಮತ್ತು ಬೆರ್ನಿಕೆರಾಣಿ ವೈಭವದ ಬಟ್ಟೆಗಳನ್ನು ಧರಿಸಿಕೊಂಡು ಸೇನಾಧಿಕಾರಿಗಳೊಡನೆ ಹಾಗೂ ಸೆಜರೇಯದ ಪ್ರಮುಖರೊಡನೆ ನ್ಯಾಯಾಲಯದೊಳಗೆ ಬಂದರು. ಪೌಲನನ್ನು ಒಳಗೆ ಕರೆದುಕೊಂಡು ಬರಬೇಕೆಂದು ಫೆಸ್ತನು ಸೈನಿಕರಿಗೆ ಆಜ್ಞಾಪಿಸಿದನು. 24ಫೆಸ್ತನು ಇಂತೆಂದನು: ''ರಾಜ ಅಗ್ರಿಪ್ಪನೇ, ನಮ್ಮೊಂದಿಗೆ ಇಲ್ಲಿ ನೆರೆದಿರುವ ಎಲ್ಲಾ ಜನರೇ, ನೀವು ನೋಡುತ್ತಿರುವ ಈ ಮನುಷ್ಯನ(ಪೌಲನ) ಮೇಲೆ ಇಲ್ಲಿರುವ ಮತ್ತು ಜೆರುಸಲೇಮಿನಲ್ಲಿರುವ ಎಲ್ಲಾ ಯೆಹೂದ್ಯರು ನನಗೆ ದೂರುಗಳನ್ನು ಹೇಳಿ, ಇವನಿಗೆ ಮರಣ ದಂಡನೆ ಆಗಬೇಕೆಂದು ಆರ್ಭಟಿಸಿದರು. 25ನಾನು ಇವನನ್ನು ವಿಚಾರಣೆ ಮಾಡಿದಾಗ ಇವನಲ್ಲಿ ನನಗೆ ಯಾವ ತಪ್ಪೂ ಕಾಣಲಿಲ್ಲ. ಆದರೆ ಸೀಸರನಿಂದಲೇ ತನಗೆ ನ್ಯಾಯತೀರ್ಪಾಗಬೇಕೆಂದು ಇವನು ಕೇಳಿಕೊಂಡಿದ್ದಾನೆ. ಆದ್ದರಿಂದ ಇವನನ್ನು ರೋಮಿಗೆ ಕಳುಹಿಸಲು ನಾನು ತೀರ್ಮಾನಿಸಿದೆ. 26ಆದರೆ ಇವನ ವಿಷಯದಲ್ಲಿ ಸೀಸರನಿಗೆ ಬರೆಯಲು ನಿರ್ದಿಷ್ಟವಾದ ಅಪರಾಧವೇನೂ ನನಗೆ ತೋರುತ್ತಿಲ್ಲ. ಆದ್ದರಿಂದ ನಾನು ಇವನನ್ನು ನಿಮ್ಮೆಲ್ಲರ ಮುಂದೆಯೂ ವಿಶೇಷವಾಗಿ ರಾಜನಾದ ಅಗ್ರಿಪ್ಪನ ಮುಂದೆಯೂ ತಂದಿದ್ದೇನೆ. ಆದ್ದರಿಂದ ನೀವು ಇವನನ್ನು ಪ್ರಶ್ನಿಸಿ ಇವನ ಬಗ್ಗೆ ಸೀಸರನಿಗೆ ಬರೆಯಲು ಏನಾದರೂ ವಿಷಯವನ್ನು ಕೊಡಬಲ್ಲಿರೆಂದು ನಿರೀಕ್ಷಿಸುತ್ತೇನೆ. 27ನಾನು ಯೋಚಿಸುವಂತೆ, ಒಬ್ಬ ಕೈದಿಯ ವಿರುದ್ಧವಿರುವ ದೋಷಾರೋಪಣೆಗಳನ್ನು ಸ್ಪಷ್ಟಪಡಿಸದೆ ಅವನನ್ನು ಸೀಸರನ ಬಳಿಗೆ ಕಳುಹಿಸುವುದು ಮೂರ್ಖತನವಾಗಿದೆ.''

## ರಾಜ ಅಗ್ರಿಪ್ಪನ ಮುಂದೆ ಪೌಲನು

26 ಅಗ್ರಿಪ್ಪನು ಪೌಲನಿಗೆ,''ಈಗ ನೀನು ನಿನ್ನ ಪರವಾಗಿ ಮಾತಾಡಬಹುದು'' ಎಂದು ಹೇಳಿದನು. ಆಗ ಪೌಲನು ತನ್ನ ಕೈಯೆತ್ತಿ ಮಾತಾಡಲಾರಂಭಿಸಿ ಇಂತೆಂದನು: 2''ರಾಜನಾದ ಅಗ್ರಿಪ್ಪನೇ, ಯೆಹೂದ್ಯರು ನನ್ನ ಮೇಲೆ ಹೊರಿಸುತ್ತಿರುವ ಆಪಾದನೆಗಳಿಗೆಲ್ಲಾ ನಾನು ಉತ್ತರಕೊಡುವೆನು. ಇಂದು ನಿನ್ನ ಮುಂದೆ ನಿಂತುಕೊಂಡು ಪ್ರತಿವಾದ ಮಾಡುವ ಅವಕಾಶ ದೊರೆತಿರುವುದು ನನ್ನ ಭಾಗ್ಯವೆಂದೇ ಎಣಿಸುತ್ತೇನೆ. 3ನಾನು ನಿನ್ನೊಂದಿಗೆ ಮಾತಾಡಲು ಬಹು ಸಂತೋಷಪಡುತ್ತೇನೆ. ಯಾಕೆಂದರೆ, ಯೆಹೂದ್ಯರ ಎಲ್ಲಾ ಸಂಪ್ರದಾಯಗಳ ಬಗ್ಗೆ ಮತ್ತು ಯೆಹೂದ್ಯರು ವಾದಿಸುತ್ತಿರುವ ಸಂಗತಿಗಳ ಬಗ್ಗೆ ನಿನಗೆ ಚೆನ್ನಾಗಿ ಗೊತ್ತಿದೆ. ಆದ್ದರಿಂದ ದಯವಿಟ್ಟು ನನ್ನ ಮಾತುಗಳನ್ನು ತಾಳ್ಮೆಯಿಂದ ಆಲಿಸು.

4''ನನ್ನ ಇಡೀ ಜೀವಮಾನದ ಬಗ್ಗೆ ಎಲ್ಲಾ ಯೆಹೂದ್ಯರಿಗೆ ಗೊತ್ತಿದೆ. ನಾನು ಆರಂಭದಿಂದ ನನ್ನ ಸ್ವದೇಶದಲ್ಲಿಯೂ ಅನಂತರ ಜೆರುಸಲೇಮಿನಲ್ಲಿಯೂ ಜೀವಿಸಿದ ರೀತಿಯನ್ನು ಅವರು ಬಲ್ಲರು. 5ಈ ಯೆಹೂದ್ಯರು ಬಹುಕಾಲದಿಂದಲೂ ನನ್ನನ್ನು ತಿಳಿದಿದ್ದಾರೆ. ನೀನು ಅವರನ್ನು ಕೇಳುವುದಾದರೆ, ನಾನು ಒಳ್ಳೆಯ ಫರಿಸಾಯನಾಗಿದ್ದೆನೆಂದು ಅವರು ನಿನಗೆ ಹೇಳಬಲ್ಲರು. ಯೆಹೂದ್ಯರ ಇತರ ಯಾವುದೇ ಪಂಗಡಗಳಿಗಿಂತಲೂ ಹೆಚ್ಚು ಎಚ್ಚರಿಕೆಯಿಂದ ಫರಿಸಾಯರು ಯೆಹೂದ್ಯ ಧರ್ಮದ ಕಟ್ಟಳೆಗಳಿಗೆ ವಿಧೇಯರಾಗುತ್ತಾರೆ. 6ದೇವರು ನಮ್ಮ ಪಿತೃಗಳಿಗೆ ಮಾಡಿದ ವಾಗ್ದಾನವನ್ನು ನಾನು ನಿರೀಕ್ಷಿಸಿಕೊಂಡಿರುವುದ

ರಿಂದಲೇ ಈಗ ವಿಚಾರಣೆಗೆ ಗುರಿಯಾಗಿದ್ದೇನೆ. [7]ಈ
ವಾಗ್ದಾನವು ಖಂಡಿತವಾಗಿ ನೆರವೇರುತ್ತದೆ ಎಂದು ಹನ್ನೆರಡು ಕುಲಗಳ ನಮ್ಮ ಜನರು ನಿರೀಕ್ಷಿಸಿಕೊಂಡಿದ್ದಾರೆ. ಯೆಹೂದ್ಯರು ಹಗಲಿರುಳು ದೇವರ ಸೇವೆ ಮಾಡುತ್ತಿರುವುದು ಈ ನಿರೀಕ್ಷೆಯಿಂದಲೇ. ನಾನು ಸಹ ಇದೇ ನಿರೀಕ್ಷೆಯನ್ನು ಹೊಂದಿರುವುದರಿಂದ ಇವರು ನನ್ನ ಮೇಲೆ ಆಪಾದನೆಗಳನ್ನು ಹೊರಿಸಿ
ದ್ದಾರೆ! [8]ಸತ್ತವರನ್ನು ದೇವರು ಜೀವಂತವಾಗಿ ಎಬ್ಬಿಸುತ್ತಾನೆ ಎಂಬುದು ನಂಬತಕ್ಕದ್ದಲ್ಲವೆಂದು ನೀವು ಭಾವಿಸಿಕೊಂಡಿರುವುದೇಕೆ?

[9]“ನಾನು ಫರಿಸಾಯನಾಗಿದ್ದಾಗ ನಜರೇತಿನ ಯೇಸುವಿನ ಹೆಸರಿಗೆ ವಿರೋಧವಾಗಿ ಅನೇಕ ಕಾರ್ಯಗಳನ್ನು ಮಾಡಬೇಕೆಂದು ಆಲೋಚಿಸಿಕೊಂಡೆನು. [10]ಜೆರುಸಲೇಮಿನಲ್ಲಿ
ವಿಶ್ವಾಸಿಗಳ ವಿರೋಧವಾಗಿ ಅನೇಕ ಕಾರ್ಯಗಳನ್ನು ಮಾಡಿದೆ. ಈ ವಿಶ್ವಾಸಿಗಳಲ್ಲಿ ಅನೇಕರನ್ನು ಸೆರೆಮನೆಗೆ ಹಾಕಲು ಮಹಾಯಾಜಕರು ನನಗೆ ಅಧಿಕಾರವನ್ನು ಕೊಟ್ಟರು. ಯೇಸುವಿನ ಶಿಷ್ಯರನ್ನು ಕೊಂದಾಗ ಅದಕ್ಕೆ ನಾನೂ ನನ್ನ ಸಮ್ಮತಿಯನ್ನು
ಸೂಚಿಸಿದೆ. [11]ಪ್ರತಿಯೊಂದು ಸಭಾಮಂದಿರದಲ್ಲಿಯೂ ನಾನು
ಅವರನ್ನು ದಂಡಿಸಿದೆನು. ಯೇಸುವಿನ ವಿರುದ್ಧ ದೂಷಣೆಯ ಮಾತುಗಳನ್ನು ಅವರ ಬಾಯಿಂದ ಹೊರಡಿಸಲು ನಾನು ಪ್ರಯತ್ನಿಸಿದೆನು. ಆ ವಿಶ್ವಾಸಿಗಳ ಮೇಲೆ ಬಹುಕೋಪವುಳ್ಳವನಾಗಿದ್ದು ಅವರನ್ನು ಹುಡುಕಿಹುಡುಕಿ ಹಿಂಸಿಸುವುದಕ್ಕಾಗಿ ವಿದೇಶದ ಪಟ್ಟಣಗಳಿಗೂ ಹೋದೆನು.

## ತನಗಾದ ದರ್ಶನದ ಬಗ್ಗೆ ಪೌಲನ ಸಾಕ್ಷಿ

[12]“ಒಂದು ಸಲ, ದಮಸ್ಕ ಪಟ್ಟಣಕ್ಕೆ ಹೋಗಲು ಮಹಾಯಾಜಕರು ನನಗೆ ಅಪ್ಪಣೆಯನ್ನೂ ಅಧಿಕಾರವನ್ನೂ ಕೊಟ್ಟರು.
[13]ನಾನು ದಮಸ್ಕದ ದಾರಿಯಲ್ಲಿ ಹೋಗುತ್ತಿದ್ದೆನು. ಆಗ ಮಧ್ಯಾಹ್ನವಾಗಿತ್ತು. ಇದ್ದಕ್ಕಿದ್ದಂತೆ ಆಗ ಆಕಾಶದಿಂದ ಸೂರ್ಯನಿಗಿಂತಲೂ ಪ್ರಕಾಶಮಾನವಾದ ಬೆಳಕೊಂದು ಬಂದು ನನ್ನ ಸುತ್ತಲೂ ಮತ್ತು ನನ್ನೊಂದಿಗೆ ಪ್ರಯಾಣ ಮಾಡುತ್ತಿದ್ದವರ
ಸುತ್ತಲೂ ಪ್ರಜ್ವಲಿಸಿತು. [14]ನಾವೆಲ್ಲರೂ ನೆಲಕ್ಕೆ ಬಿದ್ದೆವು. ಆಗ ವಾಣಿಯೊಂದು ಯೆಹೂದ್ಯರ ಭಾಷೆಯಲ್ಲಿ* ನನ್ನೊಂದಿಗೆ ಮಾತಾಡುವುದನ್ನು ಕೇಳಿದೆನು. ಆ ವಾಣಿಯು,‘ಸೌಲನೇ, ಸೌಲನೇ, ನೀನು ಯಾಕೆ ನನ್ನನ್ನು ಹಿಂಸಿಸುತ್ತಿರುವೆ? ಮುಳ್ಳುಗೋಲನ್ನು ಒದೆಯುವುದು ನಿನಗೆ ಕಷ್ಟ’ ಎಂದು ಹೇಳಿತು.
[15]ನಾನು, ‘ಪ್ರಭುವೇ, ನೀನು ಯಾರು?’ ಎಂದೆನು. ಪ್ರಭುವು,
‘ನೀನು ಹಿಂಸೆಪಡಿಸುತ್ತಿರುವ ಯೇಸುವೇ ನಾನು. [16]ಎದ್ದೇಳು!
ನಿನ್ನನ್ನು ನನ್ನ ಸೇವಕನನ್ನಾಗಿಯೂ ಸಾಕ್ಷಿಯನ್ನಾಗಿಯೂ ಆರಿಸಿಕೊಂಡಿದ್ದೇನೆ. ಈ ಹೊತ್ತು ನಾನು ನಿನಗೆ ಕಾಣಿಸಿಕೊಂಡದ್ದರ ವಿಷಯವಾಗಿಯೂ ನಾನು ನಿನಗೆ ಕೊಡಲಿರುವ ದರ್ಶನಗಳ ವಿಷಯವಾಗಿಯೂ ನೀನು ಜನರಿಗೆ ಸಾಕ್ಷಿಯಾಗಿರುವೆ. ಇದಕ್ಕಾಗಿಯೇ ಈ ಹೊತ್ತು ನಾನು ನಿನಗೆ ಕಾಣಿಸಿಕೊಂಡೆನು. [17]ನಿನ್ನ
ಸ್ವಂತ ಜನರಿಂದಲೂ ಯೆಹೂದ್ಯರಲ್ಲದ ಜನರಿಂದಲೂ ನಿನಗೆ ಕೇಡಾಗದಂತೆ ಕಾಪಾಡುವೆನು. ನಾನು ನಿನ್ನನ್ನು ಅವರ ಬಳಿಗೆ
ಕಳುಹಿಸುತ್ತಿದ್ದೇನೆ. [18]ನೀನು ಅವರಿಗೆ ಸತ್ಯವನ್ನು ತಿಳಿಸಿ ಅವರನ್ನು
ಕತ್ತಲೆಯಿಂದ ಬೆಳಕಿಗೆ ಬರುವಂತೆಯೂ ಸೈತಾನನ ಅಧಿಕಾರಕ್ಕೆ ವಿಮುಖರಾಗಿ ದೇವರ ಕಡೆಗೆ ತಿರುಗಿಕೊಳ್ಳುವಂತೆಯೂ ಮಾಡಬೇಕು. ಆಗ ಅವರ ಪಾಪಗಳು ಕ್ಷಮಿಸಲ್ಪಡುತ್ತವೆ. ನನ್ನಲ್ಲಿ ನಂಬಿಕೆ ಇಡುವುದರ ಮೂಲಕ ಪವಿತ್ರರಾದ ಜನರೊಂದಿಗೆ ಅವರು ಪಾಲು ಹೊಂದುವರು ಎಂದನು.’ ”

## ತನ್ನ ಸೇವೆಯ ಬಗ್ಗೆ ಪೌಲನ ವಿವರಣೆ

[19]ಪೌಲನು ಮಾತನ್ನು ಮುಂದುವರಿಸಿ ಇಂತೆಂದನು:
“ರಾಜನಾದ ಅಗ್ರಿಪ್ಪನೇ, ನಾನು ಪರಲೋಕದ ಈ ದರ್ಶನವನ್ನು ಕಂಡ ಮೇಲೆ ಅದಕ್ಕೆ ವಿಧೇಯನಾದೆನು. [20]ನಾನು
ಜನರಿಗೆ, ‘ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳಿರಿ’ ಎಂತಲೂ ಅವರಿಗಾಗಿರುವ ಮಾನಸಾಂತರವನ್ನು ಯೋಗ್ಯವಾದ ಕಾರ್ಯಗಳ ಮೂಲಕ ತೋರ್ಪಡಿಸಬೇಕೆಂತಲೂ ಹೇಳಿದೆನು. ಮೊದಲನೆಯದಾಗಿ ದಮಸ್ಕಕ್ಕೂ ಬಳಿಕ ಜೆರುಸಲೇಮಿಗೂ ಜುದೇಯದ ಪ್ರತಿಯೊಂದು ಭಾಗಕ್ಕೂ ಹೋಗಿ ಅಲ್ಲಿರುವ ಜನರಿಗೆ ಈ ಸಂಗತಿಗಳನ್ನು ತಿಳಿಸಿದೆನು. ಅಲ್ಲದೆ ಯೆಹೂದ್ಯರಲ್ಲದ ಜನರ ಬಳಿಗೂ
ಹೋದೆನು. [21]ಈ ಕಾರಣಗಳಿಂದ ಯೆಹೂದ್ಯರು ನನ್ನನ್ನು
ದೇವಾಲಯದಲ್ಲಿ ಬಂಧಿಸಿ ಕೊಲ್ಲಲು ಪ್ರಯತ್ನಿಸಿದರು.
[22]ಆದರೆ ದೇವರು ನನಗೆ ಸಹಾಯಮಾಡಿದನು. ಆತನು ಇಂದಿನವರೆಗೂ ನನಗೆ ಸಹಾಯಮಾಡುತ್ತಿದ್ದಾನೆ. ಆದ್ದರಿಂದಲೇ ಇಂದು ಇಲ್ಲಿ ನಿಂತುಕೊಂಡಿದ್ದೇನೆ ಮತ್ತು ನಾನು ಕಂಡ ಸಂಗತಿಗಳ ಬಗ್ಗೆ ಜನರಿಗೆಲ್ಲಾ ಸಾಕ್ಷಿ ಹೇಳುತ್ತಿದ್ದೇನೆ. ಆದರೆ ನಾನು ಯಾವ ಹೊಸದನ್ನೂ ಹೇಳದೆ, ಮೋಶೆ ಮತ್ತು ಪ್ರವಾದಿಗಳು ನೆರವೇರುತ್ತವೆ ಎಂದು ಹೇಳಿದ ಸಂಗತಿಗಳನ್ನೇ ಹೇಳುತ್ತಿದ್ದೇನೆ.
[23]ಕ್ರಿಸ್ತನು ಬಾಧೆಪಟ್ಟು ಸತ್ತು, ಸತ್ತವರೊಳಗಿಂದ ಮೊದಲನೆಯವನಾಗಿ ಎದ್ದು ಬಂದು, ಯೆಹೂದ್ಯರಿಗೂ ಯೆಹೂದ್ಯರಲ್ಲದವರಿಗೂ ಬೆಳಕನ್ನು ತರುತ್ತಾನೆಂದು ಮೋಶೆ ಮತ್ತು ಪ್ರವಾದಿಗಳು ಹೇಳಿದ್ದಾರೆ.”

## ಅಗ್ರಿಪ್ಪನನ್ನು ಒಡಂಬಡಿಸಲು ಪೌಲನ ಪ್ರಯತ್ನ

[24]ಪೌಲನು ತನ್ನ ಪರವಾಗಿ ಈ ಸಂಗತಿಗಳನ್ನು ಹೇಳುತ್ತಿರಲು ಫೆಸ್ತನು, “ಪೌಲನೇ, ನೀನು ಹುಚ್ಚನಾಗಿರುವೆ! ಅಧಿಕ ಅಧ್ಯಯನ ನಿನ್ನನ್ನು ಹುಚ್ಚನನ್ನಾಗಿ ಮಾಡಿದೆ!” ಎಂದು ಕೂಗಿ ಹೇಳಿದನು.

[25]ಪೌಲನು, “ಮಹಾರಾಜಶ್ರೀಗಳಾದ ಫೆಸ್ತನೇ, ನಾನು ಹುಚ್ಚನಲ್ಲ. ನಾನು ಹೇಳುತ್ತಿರುವುದು ಸತ್ಯಸಂಗತಿಗಳಾಗಿವೆ. ನನ್ನ ಮಾತುಗಳು ಮೂರ್ಖನ ಮಾತುಗಳಲ್ಲ. ನಾನು ಸ್ವಸ್ಥಬುದ್ಧಿ
ಯುಳ್ಳವನಾಗಿದ್ದೇನೆ. [26]ರಾಜನಾದ ಅಗ್ರಿಪ್ಪನಿಗೆ ಈ ಸಂಗತಿಗಳು
ತಿಳಿದಿವೆ. ನಾನು ಅವನೊಂದಿಗೆ ಸ್ವತಂತ್ರವಾಗಿ ಮಾತಾಡಬಲ್ಲೆನು. ಈ ಎಲ್ಲಾ ಸಂಗತಿಗಳ ಬಗ್ಗೆ ಅವನು ಕೇಳಿದ್ದಾನೆಂದು ನನಗೆ ಗೊತ್ತಿದೆ. ಯಾಕೆಂದರೆ ಎಲ್ಲಾ ಜನರು ನೋಡಬಹುದಾದ
ಸ್ಥಳದಲ್ಲಿ ಈ ಸಂಗತಿಗಳು ನೆರವೇರಿದವು. [27]ರಾಜ ಅಗ್ರಿಪ್ಪನೇ,
ಪ್ರವಾದಿಗಳು ಬರೆದ ಸಂಗತಿಗಳನ್ನು ನೀನು ನಂಬುವಿಯಾ? ನೀನು ನಂಬುವೆ ಎಂದು ನನಗೆ ಗೊತ್ತಿದೆ!” ಎಂಬುದಾಗಿ
ಹೇಳಿದನು. [28]ರಾಜ ಅಗ್ರಿಪ್ಪನು ಪೌಲನಿಗೆ, “ಬಹು
ಸುಲಭವಾಗಿ ನನ್ನನ್ನು ಒಪ್ಪಿಸಿ ಕ್ರೈಸ್ತನನ್ನಾಗಿ ಮಾಡಬಹುದೆಂದು ನೀನು ಯೋಚಿಸಿಕೊಂಡಿರುವಿಯಾ?” ಎಂದು ಕೇಳಿದನು.

---

**ಯೆಹೂದ್ಯರ ಭಾಷೆ** ಅರಮೇಯಿಕ್ ಭಾಷೆ

29ಪೌಲನು, ‘‘ಸುಲಭವೋ ಕಷ್ಟವೋ ಅದು ನನಗೆ ಮುಖ್ಯ
ವಲ್ಲ. ನೀನು ಮಾತ್ರವಲ್ಲ, ಇಂದು ನನ್ನನ್ನು ಆಲಿಸುತ್ತಿರುವ
ಪ್ರತಿಯೊಬ್ಬರೂ ರಕ್ಷಣೆ ಹೊಂದಿ ನನ್ನಂತೆಯೇ ಆಗಬೇಕೆಂದು
ನಾನು ದೇವರಲ್ಲಿ ಪ್ರಾರ್ಥಿಸುತ್ತೇನೆ. ಆದರೆ ಈ ಸಂಕೋಲೆಗಳು
ಮಾತ್ರ ನಿಮಗೆ ಬೇಡ!’’ ಎಂದು ಹೇಳಿದನು.
30ರಾಜ ಅಗ್ರಿಪ್ಪನು, ರಾಜ್ಯಪಾಲ ಫೆಸ್ತನು, ಬೆರ್ನಿಕೆರಾಣಿ
ಮತ್ತು ಅವರೊಂದಿಗೆ ಕುಳಿತುಕೊಂಡಿದ್ದ ಜನರೆಲ್ಲರೂ ಎದ್ದು
ನಿಂತು 31ಅಲ್ಲಿಂದ ಹೊರಗೆ ಹೋದರು. ಅವರು ಒಬ್ಬರಿ
ಗೊಬ್ಬರು, ‘‘ಈ ಮನುಷ್ಯನನ್ನು ಕೊಲ್ಲಬಾರದು ಅಥವಾ ಸೆರೆ
ಮನೆಗೆ ಹಾಕಬಾರದು. ಇವನು ನಿಜವಾಗಿಯೂ ಕೆಟ್ಟದ್ದೇನೂ
ಮಾಡಿಲ್ಲ!’’ ಎಂದು ಮಾತಾಡಿಕೊಂಡರು. 32ಬಳಿಕ ಅಗ್ರಿಪ್ಪನು
ಫೆಸ್ತನಿಗೆ, ‘‘ಇವನು ಸೀಸರನಿಗೆ ಬಿನ್ನಹ ಮಾಡಿಕೊಳ್ಳದಿದ್ದರೆ,
ಇವನನ್ನು ಬಿಡುಗಡೆ ಮಾಡಬಹುದಿತ್ತು’’ ಎಂದು ಹೇಳಿದನು.

## ರೋಮಿಗೆ ಪೌಲನ ನೌಕಾಯಾನ

27 ನಾವು ಇಟಲಿಗೆ ನೌಕಾಯಾನ ಮಾಡಬೇಕೆಂದು
ತೀರ್ಮಾನವಾಯಿತು. ಪೌಲನಿಗೂ ಇತರ ಕೆಲವು
ಕೈದಿಗಳಿಗೂ ಜೂಲಿಯಸ್ ಎಂಬ ಸೇನಾಧಿಕಾರಿಯು ಕಾವಲಾ
ಗಿದ್ದನು. ಜೂಲಿಯಸನು ಚಕ್ರವರ್ತಿಯ ಸೈನ್ಯದಲ್ಲಿ ಸೇವೆ ಸಲ್ಲಿಸು
ತ್ತಿದ್ದನು. 2ನಾವು ಹಡಗನ್ನು ಹತ್ತಿ ಅಲ್ಲಿಂದ ಹೊರಟೆವು. ಆ
ಹಡಗು ಅದ್ರಮಿತ್ತಿ ಪಟ್ಟಣದಿಂದ ಬಂದಿತ್ತು ಮತ್ತು ಏಷ್ಯಾದ
ಬೇರೆಬೇರೆ ಸ್ಥಳಗಳಿಗೆ ಹೋಗಲು ಸಿದ್ಧವಾಗಿತ್ತು. ಅರಿಸ್ತಾರ್ಕನು
ನಮ್ಮೊಂದಿಗೆ ಬಂದನು. ಅವನು ಮಕೆದೋನಿಯಕ್ಕೆ ಸೇರಿದ
ಥೆಸಲೋನಿಕ ಪಟ್ಟಣದವನು. 3ಮರುದಿನ ನಾವು ಸಿದೋನ್
ಪಟ್ಟಣಕ್ಕೆ ಬಂದೆವು. ಜೂಲಿಯಸನು ಪೌಲನ ಬಗ್ಗೆ ಕನಿಕರ
ವುಳ್ಳವನಾಗಿದ್ದನು. ಸ್ನೇಹಿತರ ಬಳಿಗೆ ಹೋಗಿ ಅವರನ್ನು ಭೇಟಿ
ಯಾಗಲು ಅವನು ಪೌಲನಿಗೆ ಸ್ವತಂತ್ರವನ್ನು ಕೊಟ್ಟನು.
ಸ್ನೇಹಿತರು ಪೌಲನ ಅಗತ್ಯತೆಗಳನ್ನು ಪೂರೈಸಿದರು. 4ನಾವು
ಸಿದೋನ್ ಪಟ್ಟಣದಿಂದ ಹೊರಟೆವು. ಎದುರುಗಾಳಿ ಬೀಸು
ತ್ತಿದ್ದ ಕಾರಣ ನಾವು ಸೈಪ್ರಸ್ ದ್ವೀಪದ ಸಮೀಪದಲ್ಲಿ
ನೌಕಾಯಾನ ಮಾಡಿದೆವು. 5ಸಿಲಿಸಿಯಾಕ್ಕೂ ಪಾಂಫೀಲಿ
ಯಕ್ಕೂ ಎದುರಾಗಿರುವ ಸಮುದ್ರವನ್ನು ನಾವು ದಾಟಿದೆವು.
ಬಳಿಕ ನಾವು ಲುಸಿಯ ಪ್ರಾಂತ್ಯದಲ್ಲಿರುವ ‘ಮುರ’ ಎಂಬ
ಊರಿಗೆ ಬಂದೆವು. 6ಅಲೆಕ್ಸಾಂಡ್ರಿಯಾದಿಂದ ಬಂದ ಹಡ
ಗೊಂದು ‘ಮುರ’ದಲ್ಲಿ ಇದ್ದುದ್ದನ್ನು ಸೇನಾಧಿಕಾರಿಯು
ಕಂಡನು. ಈ ಹಡಗು ಇಟಲಿಗೆ ಹೋಗಲಿತ್ತು. ಆದ್ದರಿಂದ
ಅವನು ನಮ್ಮನ್ನು ಆ ಹಡಗಿಗೆ ಹತ್ತಿಸಿದನು. 7ನಾವು ಅನೇಕ
ದಿನಗಳವರೆಗೆ ನಿಧಾನವಾಗಿ ನೌಕಾಯಾನ ಮಾಡಿದೆವು.
ಎದುರುಗಾಳಿ ಬೀಸುತ್ತಿದ್ದುದರಿಂದ ನಾವು ಕ್ನೀಡ ಪಟ್ಟಣವನ್ನು
ತಲುಪುವುದೇ ಕಷ್ಟವಾಯಿತು. ಆ ಮಾರ್ಗದಲ್ಲಿ ಇನ್ನೂ ಮುಂದೆ
ಪ್ರಯಾಣ ಮಾಡಲು ನಮಗೆ ಸಾಧ್ಯವಾಗಲಿಲ್ಲ. ಆದ್ದರಿಂದ
ನಾವು ಸಾಲ್ಮೊನೆಯ ಸಮೀಪದಲ್ಲಿದ್ದ ಕ್ರೇಟ್ ದ್ವೀಪದ ದಕ್ಷಿಣದ
ಭಾಗದಲ್ಲಿ ನೌಕಾಯಾನ ಮಾಡಿದೆವು. 8ನಾವು ಪ್ರಯಾಸದಿಂದ
ಕರಾವಳಿಯಲ್ಲೇ ನೌಕಾಯಾನ ಮಾಡಿದೆವು. ಬಳಿಕ ನಾವು
‘ಸುರಕ್ಷಿತ ರೇವು’ ಎಂಬ ಸ್ಥಳಕ್ಕೆ ಬಂದೆವು. ಲಸಾಯ ಪಟ್ಟಣವು
ಅದರ ಸಮೀಪದಲ್ಲಿತ್ತು. 9ಆದರೆ ನಾವು ಬಹಳ ಸಮಯವನ್ನು
ಕಳೆದುಕೊಂಡಿದ್ದೆವು. ಈಗ ನೌಕಾಯಾನ ಮಾಡುವುದು
ಅಪಾಯಕರವಾಗಿತ್ತು. ಯಾಕೆಂದರೆ ಯೆಹೂದ್ಯರ ಉಪವಾಸ
ದಿನ* ಆಗಲೇ ಕಳೆದಿತ್ತು. 10ಆದ್ದರಿಂದ ಪೌಲನು ಅವರಿಗೆ,
‘‘ಜನರೇ, ಈ ಪ್ರಯಾಣದಲ್ಲಿ ನಮಗೆ ಬಹಳ ತೊಂದರೆಯಿದೆ
ಎಂದು ನನಗೆ ತೋರುತ್ತಿದೆ. ಹಡಗು ಮತ್ತು ಹಡಗಿನಲ್ಲಿರುವ
ವಸ್ತುಗಳು ನಾಶವಾಗುತ್ತವೆ. ನಮ್ಮ ಪ್ರಾಣಗಳು ಸಹ
ನಷ್ಟವಾಗಬಹುದು!’’ ಎಂದು ಎಚ್ಚರಿಸಿದನು. 11ಆದರೆ
ನೌಕೆಯ ನಾಯಕನು ಮತ್ತು ನೌಕೆಯ ಯಜಮಾನನು
ಪೌಲನ ಮಾತನ್ನು ಒಪ್ಪಿಕೊಳ್ಳಲಿಲ್ಲ. ಆದುದರಿಂದ
ಸೇನಾಧಿಕಾರಿಯು ಪೌಲನ ಮಾತಿಗೆ ಗಮನ ಕೊಡದೆ, ನೌಕೆಯ
ನಾಯಕನು ಮತ್ತು ಯಜಮಾನನು ಹೇಳಿದ ಮಾತುಗಳನ್ನು
ನಂಬಿದನು. 12ಆ ರೇವು(ಸುರಕ್ಷಿತ ರೇವು) ಚಳಿಗಾಲದಲ್ಲಿ
ಹಡಗು ನಿಲ್ಲುವುದಕ್ಕೆ ಒಳ್ಳೆಯ ಸ್ಥಳವಾಗಿರಲಿಲ್ಲ. ಆದ್ದರಿಂದ
ಹಡಗು ಅಲ್ಲಿಂದ ಹೊರಡಲೇಬೇಕೆಂದು ಹೆಚ್ಚು ಮಂದಿ
ನಿರ್ಧರಿಸಿದರು. ನಾವು ಫೆನಿಕ್ಸ್‌ಗೆ ತಲುಪಬಹುದೆಂದು ಅವರ
ನಿರೀಕ್ಷೆಯಾಗಿತ್ತು. ಚಳಿಗಾಲದಲ್ಲಿ ಹಡಗು ಅಲ್ಲಿ ತಂಗ
ಬಹುದಾಗಿತ್ತು. ಫೆನಿಕ್ಸ್, ಕ್ರೇಟ್ ದ್ವೀಪದ ಒಂದು ಪಟ್ಟಣ.
ಈಶಾನ್ಯ ದಿಕ್ಕಿಗೂ ಆಗ್ನೇಯ ದಿಕ್ಕಿಗೂ ಅಭಿಮುಖವಾಗಿದ್ದ
ಬಂದರನ್ನು ಅದು ಹೊಂದಿತ್ತು.

## ಬಿರುಗಾಳಿ

13ಬಳಿಕ ಒಳ್ಳೆಯ ಗಾಳಿಯು ದಕ್ಷಿಣದ ಕಡೆಯಿಂದ
ಬೀಸತೊಡಗಿತು. ಹಡಗಿನಲ್ಲಿದ್ದ ಜನರು, ‘‘ನಮಗೆ ಬೇಕಾಗಿದ್ದು
ಈ ಗಾಳಿಯೇ. ಈಗ ಅದು ನಮಗೆ ದೊರಕಿತು!’’ ಎಂದು
ಭಾವಿಸಿಕೊಂಡರು. ಆದ್ದರಿಂದ ಅವರು ಹಡಗಿನ ಲಂಗರನ್ನು*
ಮೇಲಕ್ಕೆ ಎಳೆದರು. ನಾವು ಕ್ರೇಟ್ ದ್ವೀಪದ ಕರಾವಳಿಯಲ್ಲೇ
ನೌಕಾಯಾನ ಮಾಡಿದೆವು. 14ಆದರೆ ‘ಈಶಾನ್ಯ ಮಾರುತ’*
ಎಂಬ ಬಿರುಗಾಳಿಯು ದ್ವೀಪದಲ್ಲಿ ಬೀಸತೊಡಗಿ 15ಹಡಗನ್ನು
ಬಡಿದುಕೊಂಡು ಹೋಯಿತು. ಹಡಗು ಅದಕ್ಕೆ ಎದುರಾಗಿ
ಚಲಿಸಲು ಸಾಧ್ಯವಾಗಲಿಲ್ಲ. ಆದ್ದರಿಂದ ಗಾಳಿಯು ಬೀಸುವ
ಕಡೆಗೆ ಹೋಗತೊಡಗಿದೆವು. 16ನಾವು ‘ಕಾವ್ದ’ ಎಂಬ ಚಿಕ್ಕ
ದ್ವೀಪದ ಮರೆಯಲ್ಲಿ ಹಾದುಹೋದೆವು. ಆಗ* ನಾವು ಹಡಗಿ
ನಲ್ಲಿದ್ದ ಚಿಕ್ಕ ದೋಣಿಯನ್ನು ಒಳಗೆ ತೆಗೆದುಕೊಳ್ಳಲು
ಸಾಧ್ಯವಾಯಿತು. ಆದರೂ ಆ ಕೆಲಸ ಬಹಳ ಪ್ರಯಾಸಕರ
ವಾಗಿತ್ತು. 17ಬಳಿಕ ಹಡಗು ಒಡೆದು ಹೋಗದಂತೆ ಹಡಗಿನ
ಸುತ್ತಲೂ ಹಗ್ಗಗಳನ್ನು ಬಿಗಿದರು. ಅನಂತರ ‘ಸರ್ತಿಸ್’ ಎಂಬ
ಕಳ್ಳುಸುಬಿನಲ್ಲಿ ಹಡಗು ಎಲ್ಲಿ ಸಿಕ್ಕಿಕೊಳ್ಳುವುದೊ ಎಂದು ಅವರಿಗೆ
ಭಯವಾಯಿತು. ಆದುದರಿಂದ ಅವರು ಹಾಯಿಯನ್ನು*
ಇಳಿಸಿ ಹಡಗನ್ನು ಬಡಿದುಕೊಂಡು ಹೋಗಲು ಗಾಳಿಗೆ ಅವಕಾಶ

---

**ಉಪವಾಸ ದಿನ** ಯೆಹೂದ್ಯರ ಈ ಪವಿತ್ರ ದಿನ ಬಂದ ಮೇಲೆ ಚಳಿಗಾಲ ಆರಂಭವಾಗುತ್ತದೆ. ಸಮುದ್ರದ ಮೇಲೆ ಚಂಡಮಾರುತಗಳು ಬರುವ ಕಾಲವದು.

**ಲಂಗರು** ಹಡಗಿನ ಪಕ್ಕದಲ್ಲಿ ಇಳಿಬಿಡುವ ಭಾರವಾದ ಕಬ್ಬಿಣದ ಸಲಕರಣೆ.

**ಈಶಾನ್ಯ ಮಾರುತ** ಉತ್ತರ ಮತ್ತು ಪೂರ್ವ ದಿಕ್ಕುಗಳ ನಡುವಿನ ಭಾಗ.

**ಆಗ** ಆ ದ್ವೀಪವು ಗಾಳಿಯಿಂದ ನಮ್ಮನ್ನು ಸಂರಕ್ಷಿಸಿದಾಗ.

**ಹಾಯಿ** ಹಡಗಿಗೆ ಕಟ್ಟುವ ಬಟ್ಟೆ.

ಮಾಡಿಕೊಟ್ಟರು. [18]ಮರುದಿನ, ಬಿರುಗಾಳಿ ರಭಸವಾಗಿ ಬೀಸುತ್ತಿದ್ದುದರಿಂದ ಜನರು ಹಡಗಿನಲ್ಲಿದ್ದ ಕೆಲವು ಸಾಮಾನುಗಳನ್ನು ಎಸೆದುಬಿಟ್ಟರು. [19]ಒಂದು ದಿನವಾದ ನಂತರ ಅವರು ಹಡಗಿನ ಉಪಕರಣಗಳನ್ನು ತಮ್ಮ ಕೈಯಾರೆ ಎಸೆದುಬಿಟ್ಟರು. [20]ಅನೇಕ ದಿನಗಳವರೆಗೆ ನಾವು ಸೂರ್ಯನನ್ನಾಗಲಿ ನಕ್ಷತ್ರಗಳನ್ನಾಗಲಿ ನೋಡಲಾಗಲಿಲ್ಲ. ಬಿರುಗಾಳಿಯು ಭೀಕರವಾಗಿತ್ತು. ನಾವು ಜೀವಸಹಿತ ಉಳಿಯುತ್ತೇವೆ ಎಂಬ ನಿರೀಕ್ಷೆ ಕಳೆದುಹೋಯಿತು. ನಾವು ಸಾಯುತ್ತೇವೆ ಎಂದು ಭಾವಿಸಿಕೊಂಡೆವು.

[21]ಆ ಜನರು ಬಹಳ ದಿನಗಳವರೆಗೆ ಊಟಮಾಡಲಿಲ್ಲ. ಆಗ ಒಂದು ದಿನ ಪೌಲನು ಎದ್ದುನಿಂತುಕೊಂಡು ಅವರಿಗೆ, ‘‘ಜನರೇ, ಕ್ರೇಟ್ ದ್ವೀಪದಿಂದ ಹೊರಡಬೇಡಿರಿ ಎಂದು ನಾನು ನಿಮಗೆ ಹೇಳಿದೆ. ನೀವು ನನ್ನ ಮಾತನ್ನು ಕೇಳಬೇಕಿತ್ತು. ಆಗ ನಿಮಗೆ ಇಷ್ಟು ಕಷ್ಟವಾಗಲಿ ನಷ್ಟವಾಗಲಿ ಆಗುತ್ತಿರಲಿಲ್ಲ. [22]ಈಗಲಾದರೊ ನೀವು ಸಂತೋಷದಿಂದ ಇರಬೇಕೆಂದು ನಾನು ನಿಮಗೆ ಹೇಳುತ್ತಿದ್ದೇನೆ. ನಿಮ್ಮಲ್ಲಿ ಒಬ್ಬರೂ ಸಾಯುವುದಿಲ್ಲ! ಆದರೆ ಹಡಗು ನಾಶವಾಗುವುದು. [23]ಕಳೆದ ರಾತ್ರಿ ದೇವರ ಬಳಿಯಿಂದ ದೂತನೊಬ್ಬನು ನನ್ನ ಬಳಿಗೆ ಬಂದಿದ್ದನು. ಆ ದೇವರನ್ನೇ ನಾನು ಆರಾಧಿಸುವುದು. ನಾನು ಆತನವನು. [24]ದೇವರ ದೂತನು, ‘ಪೌಲನೇ, ಭಯಪಡಬೇಡ! ನೀನು ಸೀಸರನ ಮುಂದೆ ನಿಂತುಕೊಳ್ಳಬೇಕು. ನಿನ್ನೊಂದಿಗೆ ನೌಕಾಯಾನ ಮಾಡುತ್ತಿರುವ ಎಲ್ಲಾ ಜನರ ಪ್ರಾಣಗಳನ್ನು ಉಳಿಸುವುದಾಗಿ ದೇವರು ನಿನಗೆ ವಾಗ್ದಾನವನ್ನು ಮಾಡಿದ್ದಾನೆ’ ಎಂದು ಹೇಳಿದನು. [25]ಆದ್ದರಿಂದ ಜನರೇ, ಸಂತೋಷದಿಂದಿರಿ! ನಾನು ದೇವರಲ್ಲಿ ಭರವಸೆಯಿಟ್ಟಿದ್ದೇನೆ. ಆತನ ದೂತನು ಹೇಳಿದಂತೆ ಪ್ರತಿಯೊಂದೂ ನೆರವೇರುವುದು. [26]ಆದರೆ ನಾವು ಒಂದು ದ್ವೀಪದ ದಡವನ್ನು ತಲುಪಬೇಕಾಗಿದೆ’’ ಎಂದು ಹೇಳಿದನು.

[27]ಹದಿನಾಲ್ಕನೆಯ ರಾತ್ರಿ ನಾವು ಆದ್ರಿಯ ಸಮುದ್ರದಲ್ಲಿ ಅತ್ತಿತ್ತ ಹೊಯ್ದಾಡುತ್ತಾ ಪ್ರಯಾಣವನ್ನು ಮುಂದುವರಿಸಿದೆವು. ನಾವು ಭೂಮಿಗೆ ಸಮೀಪವಾಗಿದ್ದೇವೆಂದು ನಾವಿಕರು ಆಲೋಚಿಸಿಕೊಂಡರು. [28]ಅವರು ಅಳತೆ ಗುಂಡನ್ನು ಹಗ್ಗದ ತುದಿಗೆ ಕಟ್ಟಿ ಹಗ್ಗವನ್ನು ನೀರಿನಲ್ಲಿ ಇಳಿಯಬಿಟ್ಟರು. ನೀರು ನೂರಿಪ್ಪತ್ತು ಅಡಿ ಆಳವಾಗಿತ್ತು. ಅವರು ಇನ್ನೂ ಸ್ವಲ್ಪದೂರ ಹೋಗಿ ಹಗ್ಗವನ್ನು ನೀರಿನಲ್ಲಿ ಇಳಿಯಬಿಟ್ಟರು. ಅಲ್ಲಿ ನೀರಿನ ಆಳ ತೊಂಭತ್ತು ಅಡಿಯಿತ್ತು. [29]ಹಡಗು ಬಂಡೆಗೆ ಅಪ್ಪಳಿಸಬಹುದೆಂದು ನಾವಿಕರು ಭಯಪಟ್ಟರು. ಆದ್ದರಿಂದ ಅವರು ನಾಲ್ಕು ಲಂಗರುಗಳನ್ನು ನೀರಿನೊಳಗೆ ಇಳಿಯಬಿಟ್ಟರು. ಬಳಿಕ ಅವರು ಬೆಳಗಾಗಲೆಂದು ಪ್ರಾರ್ಥಿಸಿದರು. [30]ನಾವಿಕರಲ್ಲಿ ಕೆಲವರು ಹಡಗನ್ನು ಬಿಟ್ಟು ಹೋಗಬೇಕೆಂದಿದ್ದರು. ಅವರು ದೋಣಿಯನ್ನು ನೀರಿಗೆ ಇಳಿಸಿ, ಹಡಗಿನ ಮುಂಭಾಗದಲ್ಲಿ ಇನ್ನೂ ಕೆಲವು ಲಂಗರುಗಳನ್ನು ಇಳಿಸುವವರಂತೆ ನಟಿಸಿದರು. [31]ಆದರೆ ಪೌಲನು ಸೇನಾಧಿಕಾರಿಗೆ ಮತ್ತು ಇತರ ಸೈನಿಕರಿಗೆ, ‘‘ಈ ನಾವಿಕರು ಹಡಗಿನಲ್ಲಿ ಇರದಿದ್ದರೆ ನಿಮ್ಮ ಪ್ರಾಣಗಳು ಉಳಿಯಲು ಸಾಧ್ಯವಿಲ್ಲ’’ ಎಂದು ಹೇಳಿದನು.

[32]ಆದ್ದರಿಂದ ಸೈನಿಕರು ಹಗ್ಗಗಳನ್ನು ಕತ್ತರಿಸಿ ದೋಣಿಯನ್ನು ನೀರುಪಾಲು ಮಾಡಿದರು. [33]ಇನ್ನೂ ಬೆಳಕಾಗುತ್ತಿರುವಾಗಲೇ ಏನಾದರೂ ತಿನ್ನುವಂತೆ ಪೌಲನು ಅವರನ್ನು ಒತ್ತಾಯಿಸುತ್ತಾ, ‘‘ಕಳೆದ ಹದಿನಾಲ್ಕು ದಿನಗಳಿಂದ ನೀವು ಊಟವನ್ನೇ ಮಾಡಿಲ್ಲ. [34]ಈಗ ನೀವು ಸ್ವಲ್ಪವಾದರೂ ತಿನ್ನುವಂತೆ ನಾನು ನಿಮ್ಮನ್ನು ಬೇಡಿಕೊಳ್ಳುತ್ತೇನೆ. ನೀವು ಜೀವಂತವಾಗಿ ಉಳಿಯಬೇಕಾದರೆ ನಿಮಗೆ ಊಟ ಅವಶ್ಯಕವಾಗಿದೆ. ನಿಮ್ಮಲ್ಲಿರುವ ಯಾರೂ ನಿಮ್ಮ ತಲೆಕೂದಲುಗಳಲ್ಲಿ ಒಂದನ್ನಾದರೂ ಕಳೆದುಕೊಳ್ಳುವುದಿಲ್ಲ’’ ಎಂದು ಹೇಳಿದನು. [35]ಹೀಗೆ ಹೇಳಿದ ಬಳಿಕ, ಪೌಲನು ಸ್ವಲ್ಪ ರೊಟ್ಟಿಯನ್ನು ತೆಗೆದುಕೊಂಡು ಅದಕ್ಕಾಗಿ ಅವರೆಲ್ಲರ ಮುಂದೆ ದೇವರಿಗೆ ಸ್ತೋತ್ರ ಮಾಡಿದನು. ಬಳಿಕ ಅವನು ಒಂದು ತುಂಡನ್ನು ಮುರಿದು ತಿನ್ನತೊಡಗಿದನು. [36-37]ಆಗ ಜನರೆಲ್ಲರೂ ಪ್ರೋತ್ಸಾಹಗೊಂಡು ತಿನ್ನತೊಡಗಿದರು. ಆ ಹಡಗಿನಲ್ಲಿ ಇನ್ನೂರ ಎಪ್ಪತ್ತಾರು ಮಂದಿ ಇದ್ದರು. [38]ನಾವು ತೃಪ್ತಿಯಾಗುವಷ್ಟು ತಿಂದೆವು. ಬಳಿಕ ದವಸವನ್ನು ಸಮುದ್ರಕ್ಕೆ ಎಸೆದು ಹಡಗನ್ನು ಹಗುರಗೊಳಿಸಿದೆವು.

### ನೌಕೆಯ ನಾಶ

[39]ಬೆಳಗಾದಾಗ ನಾವಿಕರು ಭೂಮಿಯನ್ನು ಕಂಡರು. ಆದರೆ ಅದು ಯಾವ ಭೂಮಿಯೆಂದು ಗೊತ್ತಿರಲಿಲ್ಲ. ಅವರು ಕಂಡದ್ದು ಉಸುಬಿನ ದಡವುಳ್ಳ ಒಂದು ಕೊಲ್ಲಿ. ಸಾಧ್ಯವಾದರೆ ಹಡಗನ್ನು ಆ ಕೊಲ್ಲಿಗೆ ನಡೆಸಬೇಕೆಂದು ನಾವಿಕರು ಬಯಸಿದರು. [40]ಆದ್ದರಿಂದ ಅವರು ಚುಕ್ಕಾಣಿಗಳನ್ನು* ಬಿಗಿಯಾಗಿ ಹಿಡಿದುಕೊಂಡಿದ್ದ ಹಗ್ಗಗಳನ್ನು ಕತ್ತರಿಸಿಹಾಕಿದರು. ಬಳಿಕ ಮುಂಭಾಗದ ಹಾಯಿಯನ್ನು ಗಾಳಿಗೆ ಎತ್ತಿಕಟ್ಟಿ ಹಡಗನ್ನು ದಡದತ್ತ ನಡೆಸತೊಡಗಿದರು. [41]ಆದರೆ ಹಡಗು ಉಸುಬಿನ ದಿಬ್ಬಕ್ಕೆ ಅಪ್ಪಳಿಸಿತು. ಹಡಗಿನ ಮುಂಭಾಗವು ಅದರಲ್ಲಿ ಸಿಕ್ಕಿಕೊಂಡಿತು. ಹಡಗು ಚಲಿಸಲಾಗಲಿಲ್ಲ. ಬಳಿಕ ದೊಡ್ಡ ಅಲೆಗಳು ಹಡಗಿನ ಹಿಂಭಾಗಕ್ಕೆ ಬಡಿದು ಚೂರುಚೂರು ಮಾಡಲಾರಂಭಿಸಿದವು.

[42]ಕೈದಿಗಳಲ್ಲಿ ಯಾರೂ ಈಜಿಕೊಂಡು ಹೋಗಿ ತಪ್ಪಿಸಿಕೊಳ್ಳಬಾರದೆಂದು ಸೈನಿಕರು ಕೈದಿಗಳನ್ನು ಕೊಲ್ಲಲು ನಿರ್ಧರಿಸಿದರು. [43]ಆದರೆ ಸೇನಾಧಿಕಾರಿಯಾದ ಜೂಲಿಯಸನು ಪೌಲನನ್ನು ಉಳಿಸಲಪೇಕ್ಷಿಸಿ ಕೈದಿಗಳನ್ನು ಕೊಲ್ಲಲು ಸೈನಿಕರಿಗೆ ಅಪ್ಪಣೆ ಕೊಡಲಿಲ್ಲ. ಈಜು ಬಲ್ಲವರೆಲ್ಲರು ನೀರಿಗೆ ಧುಮುಕಿ ಈಜಿಕೊಂಡು ದಡಕ್ಕೆ ಹೋಗಬೇಕೆಂದು ಜೂಲಿಯಸನು ಹೇಳಿದನು. [44]ಉಳಿದ ಜನರು ಹಲಗೆಗಳ ಅಥವಾ ಹಡಗಿನ ತುಂಡುಗಳ ಸಹಾಯದಿಂದ ಹೋಗಬೇಕೆಂದು ತಿಳಿಸಿದನು. ಹೀಗೆ ಜನರೆಲ್ಲರೂ ದಡವನ್ನು ಸೇರಿದರು. ಅವರಲ್ಲಿ ಒಬ್ಬರೂ ಸಾಯಲಿಲ್ಲ.

### ಮಾಲ್ಟ ದ್ವೀಪದಲ್ಲಿ ಪೌಲನು

28 ನಾವು ಸುರಕ್ಷಿತವಾಗಿ ದಡವನ್ನು ಸೇರಿದ ಮೇಲೆ ಅದು ಮಾಲ್ಟ ದ್ವೀಪವೆಂದು ನಮಗೆ ತಿಳಿಯಿತು. [2]ಆಗ ಮಳೆಯು ಸುರಿಯುತ್ತಿತ್ತು ಮತ್ತು ತುಂಬ ಚಳಿಯಿತ್ತು. ಆದರೆ ಅಲ್ಲಿನ ಜನರು ನಮಗೆ ವಿಶೇಷವಾದ ಕರುಣೆತೋರಿ ನಮಗಾಗಿ ಬೆಂಕಿಹೊತ್ತಿಸಿ ನಮ್ಮೆಲ್ಲರನ್ನು ಆಹ್ವಾನಿಸಿದರು. [3]ಪೌಲನು ಒಂದು ಹೊರೆ ಕಟ್ಟಿಗೆಯನ್ನು ಕೂಡಿಸಿ ಅದನ್ನು ಬೆಂಕಿಯ ಮೇಲೆ ಹಾಕುತ್ತಿರಲು ಅದರ ಕಾವಿನ ದೆಸೆಯಿಂದ ವಿಷದ ಹಾವೊಂದು ಹೊರಗೆ ಬಂದು ಪೌಲನ ಕೈಗೆ ಸುತ್ತಿಕೊಂಡಿತು. [4]ಪೌಲನ ಕೈಗೆ ಸುತ್ತಿಕೊಂಡಿದ್ದ ಆ ಹಾವನ್ನು ಅಲ್ಲಿನ ಜನರು ನೋಡಿ, ‘‘ಇವನು

---

**ಚುಕ್ಕಾಣಿ** ಹಡಗು ದಿಕ್ಕು ಬದಲಾಯಿಸಲು ಸಹಾಯ ಮಾಡುವ ಒಂದು ಸಾಧನ.

ಕೊಲೆಗಾರನೇ ಸರಿ! ಇವನು ಸಮುದ್ರದಲ್ಲಿ ಸಾಯದಿದ್ದರೂ
ಇವನು ಬದುಕುವುದು ನ್ಯಾಯಕ್ಕೆ* ಇಷ್ಟವಿಲ್ಲ'' ಎಂದು
ಹೇಳಿದರು. 5ಆದರೆ ಪೌಲನು ಆ ಹಾವನ್ನು ಬೆಂಕಿಯೊಳಕ್ಕೆ
ಝಾಡಿಸಿ ಬಿಟ್ಟನು. ಪೌಲನಿಗೆ ಯಾವ ಹಾನಿಯೂ ಆಗಲಿಲ್ಲ.
6ಪೌಲನ ಮೈ ಊದಿಕೊಂಡು ಇದ್ದಕ್ಕಿದ್ದಂತೆ ಸತ್ತು ಬೀಳುತ್ತಾನೆ
ಎಂದು ಅವರು ತಿಳಿದುಕೊಂಡಿದ್ದರು. ಅವರು ಪೌಲನನ್ನೇ
ಬಹು ಹೊತ್ತಿನವರೆಗೆ ದಿಟ್ಟಿಸಿ ನೋಡುತ್ತಿದ್ದರೂ ಪೌಲನಿಗೆ
ಯಾವ ಹಾನಿಯೂ ಆಗಲಿಲ್ಲ. ಆದ್ದರಿಂದ ಅವರು ತಮ್ಮ
ಅಭಿಪ್ರಾಯವನ್ನು ಬದಲಿಸಿ, ''ಇವನೊಬ್ಬ ದೇವರು!'' ಎಂದು
ಹೇಳಿದರು.

7ಆ ಸ್ಥಳದ ಸುತ್ತಮುತ್ತ ಕೆಲವು ಹೊಲಗಳು ಇದ್ದವು. ಆ
ದ್ವೀಪದ ಪ್ರಮುಖ ವ್ಯಕ್ತಿಯೊಬ್ಬನಿಗೆ ಆ ಹೊಲಗಳು ಸೇರಿದ್ದವು.
ಅವನ ಹೆಸರು ಪೊಪ್ಲಿಯ. ಅವನು ನಮ್ಮನ್ನು ತನ್ನ ಮನೆಗೆ
ಸ್ವಾಗತಿಸಿದನು. ಪೊಪ್ಲಿಯನು ಕನಿಕರ ತೋರಿದನು. ನಾವು
ಅವನ ಮನೆಯಲ್ಲಿ ಮೂರು ದಿನವಿದ್ದೆವು. 8ಪೊಪ್ಲಿಯನ
ತಂದೆಯು ಬಹಳ ಅಸ್ವಸ್ಥನಾಗಿದ್ದನು. ಅವನಿಗೆ ಜ್ವರವಿತ್ತು ಮತ್ತು
ರಕ್ತಭೇದಿಯಾಗುತ್ತಿತ್ತು. ಪೌಲನು ಅವನ ಬಳಿಗೆ ಹೋಗಿ
ಅವನಿಗಾಗಿ ಪ್ರಾರ್ಥಿಸಿ ಅವನ ಮೇಲೆ ತನ್ನ ಕೈಗಳನ್ನಿಟ್ಟು
ಗುಣಪಡಿಸಿದನು. 9ಇದಾದ ನಂತರ ದ್ವೀಪದಲ್ಲಿದ್ದ ಇತರ
ರೋಗಿಗಳೆಲ್ಲ ಪೌಲನ ಬಳಿಗೆ ಬಂದರು. ಪೌಲನು ಅವರನ್ನು
ಸಹ ಗುಣಪಡಿಸಿದನು. 10-11ಆ ದ್ವೀಪ ನಿವಾಸಿಗಳು ನಮ್ಮನ್ನು
ಬಹಳವಾಗಿ ಸನ್ಮಾನಿಸಿದರು. ನಾವು ಅಲ್ಲಿ ಮೂರು ತಿಂಗಳಿದ್ದೆವು.
ನಾವು ಅಲ್ಲಿಂದ ಹೊರಡಲು ಸಿದ್ಧರಾದಾಗ ಅವರು ನಮಗೆ
ಬೇಕಾದ ವಸ್ತುಗಳನ್ನು ಕೊಟ್ಟರು.

## ರೋಮಿಗೆ ಪೌಲನ ಪ್ರಯಾಣ

ಅಲೆಕ್ಸಾಂಡ್ರಿಯ ಪಟ್ಟಣದಿಂದ ಬಂದ ಹಡಗೊಂದನ್ನು
ನಾವು ಹತ್ತಿದೆವು. ಆ ಹಡಗು ಚಳಿಗಾಲದ ನಿಮಿತ್ತ ಮಾಲ್ಟ
ದ್ವೀಪದಲ್ಲೇ ತಂಗಿತ್ತು. ಆ ಹಡಗಿನ ಮುಂಭಾಗದಲ್ಲಿ ಎರಡು
ಗ್ರೀಕ್ ದೇವತೆಗಳ ಚಿಹ್ನೆಯಿತ್ತು. 12ನಾವು ಸಿರಾಕೊಸ್
ಪಟ್ಟಣಕ್ಕೆ ಬಂದು ಅಲ್ಲಿ ಮೂರು ದಿನವಿದ್ದೆವು. ಬಳಿಕ ಅಲ್ಲಿಂದ
ಹೊರಟು 13ರೇಗಿಯ ಎಂಬ ಪಟ್ಟಣಕ್ಕೆ ಬಂದೆವು. ಮರುದಿನ
ನೈರುತ್ಯ* ಗಾಳಿಯು ಬೀಸತೊಡಗಿತು. ಆದ್ದರಿಂದ ಅಲ್ಲಿಂದ
ಹೊರಡಲು ಸಾಧ್ಯವಾಯಿತು. ಒಂದು ದಿನವಾದ ಮೇಲೆ
ಪುತೋಲಿ ಎಂಬ ಪಟ್ಟಣಕ್ಕೆ ಬಂದೆವು. 14ಅಲ್ಲಿ ಕೆಲವು ಮಂದಿ
ವಿಶ್ವಾಸಿಗಳನ್ನು ಕಂಡೆವು. ತಮ್ಮೊಂದಿಗೆ ಒಂದು ವಾರವಾದರೂ
ಇರಬೇಕೆಂದು ಅವರು ನಮ್ಮನ್ನು ಕೇಳಿಕೊಂಡರು. ಕೊನೆಗೆ
ನಾವು ರೋಮಿಗೆ ಹೊರಟೆವು. 15ನಾವು ಇಲ್ಲಿರುವುದು
ರೋಮಿನಲ್ಲಿದ್ದ ವಿಶ್ವಾಸಿಗಳಿಗೆ ತಿಳಿಯಿತು. ಅವರು ನಮ್ಮನ್ನು
ಭೇಟಿಯಾಗುವುದಕ್ಕಾಗಿ 'ಅಪಿಯಾ' ಮಾರುಕಟ್ಟೆಗೂ* ಮತ್ತು
'ತ್ರಿಛತ್ರ'* ಎಂಬ ಸ್ಥಳಕ್ಕೂ ಬಂದರು. ಈ ವಿಶ್ವಾಸಿಗಳನ್ನು
ಕಂಡಾಗ ಪೌಲನು ಧೈರ್ಯಗೊಂಡು ದೇವರಿಗೆ ಸ್ತೋತ್ರ
ಸಲ್ಲಿಸಿದನು.

## ರೋಮಿನಲ್ಲಿ ಪೌಲನು

16ಬಳಿಕ ನಾವು ರೋಮಿಗೆ ಹೋದೆವು. ಅಲ್ಲಿ ಪ್ರತ್ಯೇಕ
ವಾಗಿರಲು ಪೌಲನಿಗೆ ಅವಕಾಶವನ್ನು ಕೊಡಲಾಯಿತು. ಆದರೆ
ಪೌಲನನ್ನು ಕಾಯುವುದಕ್ಕಾಗಿ ಸೈನಿಕನೊಬ್ಬನು ಅವನೊಂದಿ
ಗಿದ್ದನು.

17ಮೂರು ದಿನಗಳಾದ ಮೇಲೆ ಪೌಲನು ಯೆಹೂದ್ಯರಲ್ಲಿ
ಪ್ರಧಾನರಾಗಿದ್ದವರನ್ನು ಕರೆಯಿಸಿದನು. ಅವರು ಬಂದು
ಒಟ್ಟಾಗಿ ಸೇರಿದಾಗ ಪೌಲನು ಅವರಿಗೆ, ''ನನ್ನ ಯೆಹೂದ್ಯ
ಸಹೋದರರೇ, ನಮ್ಮ ಜನರಿಗೂ ನಮ್ಮ ಪಿತೃಗಳ ಸಂಪ್ರದಾಯ
ಗಳಿಗೂ ವಿರುದ್ಧವಾಗಿ ನಾನೇನೂ ಮಾಡಿಲ್ಲ. ಆದರೆ ನನ್ನನ್ನು
ಜೆರುಸಲೇಮಿನಲ್ಲಿ ಬಂಧಿಸಿ ರೋಮಿನವರಿಗೆ ಒಪ್ಪಿಸಲಾಗಿದೆ.
18ರೋಮಿನವರು ನನಗೆ ಅನೇಕ ಪ್ರಶ್ನೆಗಳನ್ನು ಕೇಳಿದರು.
ಆದರೆ ನನ್ನನ್ನು ಮರಣದಂಡನೆಗೆ ಗುರಿಮಾಡುವಂಥ ಯಾವ
ಅಪರಾಧವನ್ನೂ ಅವರು ನನ್ನಲ್ಲಿ ಕಾಣಲಿಲ್ಲ. ಆದ್ದರಿಂದ ಅವರು
ನನ್ನನ್ನು ಬಿಡುಗಡೆ ಮಾಡಬೇಕೆಂದಿದ್ದರು. 19ಆದರೆ ಅಲ್ಲಿದ್ದ
ಯೆಹೂದ್ಯರು ಅದಕ್ಕೆ ಆಕ್ಷೇಪಿಸಿದರು. ಆದ್ದರಿಂದ ನನಗೆ
ರೋಮಿನಲ್ಲಿ ಸೀಸರನ ಮುಂದೆ ವಿಚಾರಣೆಯಾಗಲಿ ಎಂದು
ಕೇಳಿಕೊಳ್ಳಬೇಕಾಯಿತು. ಆದರೆ ನನ್ನ ಜನರು ಮಾಡಿದ್ದು
ತಪ್ಪೆಂದು ನಾನು ನಿಮಗೆ ಹೇಳುತ್ತಿಲ್ಲ. 20ಆದಕಾರಣವೇ ನಾನು
ನಿಮ್ಮನ್ನು ನೋಡಲು ಮತ್ತು ನಿಮ್ಮ ಸಂಗಡ ಮಾತಾಡಲು
ಬಯಸಿದೆ. ಇಸ್ರೇಲಿನ ನಿರೀಕ್ಷೆಯಲ್ಲಿ ನಾನು ನಂಬಿಕೆ ಇಟ್ಟಿರು
ವುದರಿಂದಲೇ ಈ ಸರಪಣಿಗಳಿಂದ ಬಂಧಿತನಾಗಿದ್ದೇನೆ'' ಎಂದು
ಹೇಳಿದನು.

21-22ಯೆಹೂದ್ಯರು ಪೌಲನಿಗೆ, ''ನಿನ್ನ ಬಗ್ಗೆ ಜುದೇಯ
ದಿಂದ ನಮಗೆ ಯಾವ ಪತ್ರಗಳೂ ಬಂದಿಲ್ಲ. ಅಲ್ಲಿಂದ ಪ್ರಯಾಣ
ಮಾಡಿ ಬಂದ ನಮ್ಮ ಯೆಹೂದ್ಯ ಸಹೋದರರಲ್ಲಿ ಯಾರೂ
ನಿನ್ನ ಬಗ್ಗೆ ಸುದ್ದಿಯನ್ನು ತರಲಿಲ್ಲ ಮತ್ತು ಕೆಟ್ಟದ್ದನ್ನು ಹೇಳಲಿಲ್ಲ.
ನಿನ್ನ ಆಲೋಚನೆಗಳನ್ನು ನಾವು ಕೇಳಬಯಸುತ್ತೇವೆ. ಎಲ್ಲಾ
ಕಡೆಗಳಲ್ಲಿರುವ ಜನರು ಈ ಗುಂಪಿನ (ಕ್ರೈಸ್ತರ) ವಿರೋಧವಾಗಿ
ಮಾತಾಡುತ್ತಿದ್ದಾರೆ ಎಂಬುದು ನಮಗೆ ಗೊತ್ತಿದೆ'' ಎಂದು
ಹೇಳಿದರು.

23ಪೌಲನು ಮತ್ತು ಯೆಹೂದ್ಯರು ಸಭೆಸೇರಲು ಒಂದು
ದಿನವನ್ನು ಗೊತ್ತುಮಾಡಿದರು. ಅಂದು ಇನ್ನೂ ಅನೇಕ ಮಂದಿ
ಯೆಹೂದ್ಯರು ಪೌಲನ ಮನೆಯಲ್ಲಿ ಸಭೆಸೇರಿದರು. ಪೌಲನು
ಬೆಳಗ್ಗೆಯಿಂದ ಸಂಜೆಯವರೆಗೂ ಅವರೊಂದಿಗೆ ಮಾತಾಡಿ
ದನು; ದೇವರ ರಾಜ್ಯದ ಬಗ್ಗೆ ಅವರಿಗೆ ವಿವರಿಸಿದನು. ಯೇಸು
ವಿನ ವಿಷಯವಾದ ಸಂಗತಿಗಳಲ್ಲಿ ನಂಬಿಕೆ ಇಡುವಂತೆ ಅವರನ್ನು
ಒಪ್ಪಿಸಲು ಪ್ರಯತ್ನಿಸಿದನು.

ಇದಕ್ಕಾಗಿ ಅವನು ಮೋಶೆಯ ಧರ್ಮಶಾಸ್ತ್ರವನ್ನೂ ಪ್ರವಾದಿ
ಗಳ ಗ್ರಂಥಗಳನ್ನೂ ಬಳಸಿಕೊಂಡನು. 24ಪೌಲನು ಹೇಳಿದ
ಕೆಲವು ಸಂಗತಿಗಳನ್ನು ಕೆಲವು ಮಂದಿ ಯೆಹೂದ್ಯರು ನಂಬಿ
ದರು. ಆದರೆ ಉಳಿದವರು ನಂಬಲಿಲ್ಲ. 25ಅವರು ವಾದಮಾಡಿ
ಅಲ್ಲಿಂದ ಹೊರಡಲು ಸಿದ್ಧರಾದಾಗ ಪೌಲನು ಅವರಿಗೆ

---

**ನ್ಯಾಯ** 'ನ್ಯಾಯ ಎಂಬ ದೇವರು ಕೆಟ್ಟವರನ್ನು ದಂಡಿಸುತ್ತಾನೆ' ಎಂಬುದು ಆ ಜನರ ನಂಬಿಕೆಯಾಗಿತ್ತು.

**ನೈರುತ್ಯ** ದಕ್ಷಿಣ ಮತ್ತು ಪಶ್ಚಿಮ ದಿಕ್ಕುಗಳ ನಡುವಿನ ದಿಕ್ಕು.

**ಅಫಿಯಾ ಮಾರುಕಟ್ಟೆ** ರೋಮಿನಿಂದ 27 ಮೈಲಿ ದೂರದಲ್ಲಿದೆ.

**ತ್ರಿಛತ್ರ** ರೋಮಿನಿಂದ30 ಮೈಲಿ ದೂರದಲ್ಲಿದೆ.

ಇಂತೆಂದನು: ‘‘ಪವಿತ್ರಾತ್ಮನು ಪ್ರವಾದಿಯಾದ ಯೆಶಾಯನ ಮೂಲಕ ನಿಮ್ಮ ಪಿತೃಗಳಿಗೆ ಸತ್ಯವನ್ನು ತಿಳಿಸಿದನು. ಆತನು ಹೀಗೆ ಹೇಳಿದ್ದಾನೆ:

[26]‘‘ಈ ಜನರ ಬಳಿಗೆ ಹೋಗಿ ಇಂತೆನ್ನಿರಿ: ನೀವು ಕಿವಿಗೊಟ್ಟು ಕೇಳಿದರೂ ಅರ್ಥಮಾಡಿಕೊಳ್ಳು ವುದಿಲ್ಲ; ಕಣ್ಣಾರೆ ಕಂಡರೂ ಗ್ರಹಿಸಿಕೊಳ್ಳು ವುದಿಲ್ಲ.

[27] ಹೌದು,ಈ ಜನರ ಹೃದಯಗಳು ಕಠಿಣವಾಗಿವೆ. ಈ ಜನರಿಗೆ ಕಿವಿಗಳಿದ್ದರೂ ಕೇಳುವುದಿಲ್ಲ. ಸತ್ಯ ವಿದ್ದರೂ ನೋಡಬಯಸರು. ಅಲ್ಲದಿದ್ದರೆ ಇವರು ಕಣ್ಣಾರೆ ಕಂಡು, ಕಿವಿಯಾರೆ ಕೇಳಿ, ಮನ ಸಾರೆ ಗ್ರಹಿಸಿಕೊಂಡು ನನ್ನತ್ತ ತಿರುಗಿಕೊಳ್ಳು ತ್ತಿದ್ದರು; ನನ್ನಿಂದ ಗುಣ ಹೊಂದುತ್ತಿದ್ದರು.’

*ಯೆಶಾಯ 6: 9-10*

28‘‘ದೇವರು ತನ್ನ ರಕ್ಷಣೆಯನ್ನು ಯೆಹೂದ್ಯರಲ್ಲದವರಿಗೆ
ಕಳುಹಿಸಿದ್ದಾನೆ. ಅವರು ಅದಕ್ಕೆ ಕಿವಿಗೊಡುವರು. ಯೆಹೂದ್ಯ
ರಾದ ನಿಮಗೆ ಇದು ತಿಳಿದಿರಲಿ!’’ [29]* [30]ಪೌಲನು ತನ್ನ
ಬಾಡಿಗೆ ಮನೆಯಲ್ಲಿ ಎರಡು ವರ್ಷಗಳವರೆಗೆ ವಾಸವಾಗಿದ್ದನು.
ತನ್ನನ್ನು ಸಂದರ್ಶಿಸಲು ಬಂದ ಜನರೆಲ್ಲರನ್ನು ಆದರದಿಂದ
ಬರಮಾಡಿಕೊಂಡು, [31]ದೇವರ ರಾಜ್ಯದ ಬಗ್ಗೆ ಬೋಧಿಸು
ತ್ತಿದ್ದನು; ಪ್ರಭು ಯೇಸು ಕ್ರಿಸ್ತನ ಬಗ್ಗೆ ಉಪದೇಶಿಸುತ್ತಿದ್ದನು;
ಬಹು ಧೈರ್ಯದಿಂದ ಮಾತಾಡುತ್ತಿದ್ದನು. ಅವನಿಗೆ ಅಡ್ಡಿ
ಮಾಡಲು ಯಾರೂ ಪ್ರಯತ್ನಿಸಲಿಲ್ಲ.

---

**ವಚನ 29** ಇತ್ತೀಚಿನ ಕೆಲವು ಪ್ರತಿಗಳಲ್ಲಿ 29ನೇ ವಚನವನ್ನು ಸೇರಿಸಲಾಗಿದೆ: ‘‘ಪೌಲನು ಹೀಗೆ ಹೇಳಿದ ಮೇಲೆ, ಯೆಹೂದ್ಯರು ಹೊರಟುಹೋದರು. ಅವರು ಒಬ್ಬರಿಗೊಬ್ಬರು ಬಹಳವಾಗಿ ವಾದ ಮಾಡುತ್ತಿದ್ದರು.’’

# ರೋಮ್‌ನಗರದವರಿಗೆ ಬರೆದ ಪತ್ರ

1 ಕ್ರಿಸ್ತ ಯೇಸುವಿನ ಸೇವಕನಾದ ಪೌಲನು ಬರೆಯುವ ಪತ್ರ.
ದೇವರು ನನ್ನನ್ನು ಅಪೊಸ್ತಲನಾಗುವುದಕ್ಕೆ* ಕರೆದನು.
ದೇವರ ಸುವಾರ್ತೆಯನ್ನು ಎಲ್ಲಾ ಜನರಿಗೆ ತಿಳಿಸುವುದಕ್ಕಾಗಿ
ನಾನು ಆರಿಸಲ್ಪಟ್ಟೆನು.
2 ದೇವರು ತನ್ನ ಜನರಿಗೆ ಈ ಸುವಾರ್ತೆಯನ್ನು ಕೊಡುವು
ದಾಗಿ ಬಹುಕಾಲದ ಹಿಂದೆಯೇ ತನ್ನ ಪ್ರವಾದಿಗಳ ಮೂಲಕ
ಪವಿತ್ರ ಗ್ರಂಥದಲ್ಲಿ ವಾಗ್ದಾನ ಮಾಡಿದ್ದನು. 3-4 ದೇವರ ಮಗನೂ
ನಮ್ಮ ಪ್ರಭುವೂ ಆಗಿರುವ ಯೇಸು ಕ್ರಿಸ್ತನ ವಿಷಯವೇ ಆ
ಸುವಾರ್ತೆ. ಮನುಷ್ಯತ್ವದ ಮಟ್ಟಿಗೆ ಆತನು ದಾವೀದನ*
ಕುಟುಂಬದಲ್ಲಿ ಹುಟ್ಟಿದನು. ಆದರೆ ಯೇಸು ಪರಿಶುದ್ಧವಾದ
ಆತ್ಮನ ಮೂಲಕ ಮಹಾಶಕ್ತಿಯೊಡನೆ ಸತ್ತವರೊಳಗಿಂದ
ಜೀವಂತವಾಗಿ ಎದ್ದುಬಂದು ತಾನೇ ದೇವರ ಮಗನೆಂಬುದನ್ನು
ತೋರಿಸಿಕೊಟ್ಟನು. 5 ದೇವರು ಕ್ರಿಸ್ತನ ಮೂಲಕವಾಗಿ ನನಗೆ
ಅಪೊಸ್ತಲನೆಂಬ ವಿಶೇಷ ಕೆಲಸವನ್ನು ಕೊಟ್ಟನು. ದೇವರಲ್ಲಿ
ನಂಬಿಕೆಯಿಡುವಂತೆಯೂ ದೇವರಿಗೆ ವಿಧೇಯರಾಗು
ವಂತೆಯೂ ಎಲ್ಲಾ ಜನಾಂಗಗಳ ಜನರನ್ನು ನಡೆಸಬೇಕೆಂದು
ದೇವರು ನನಗೆ ಈ ಕೆಲಸವನ್ನು ಕೊಟ್ಟನು. ನಾನು ಈ ಕೆಲಸವನ್ನು
ಕ್ರಿಸ್ತನಿಗಾಗಿ ಮಾಡುತ್ತೇನೆ. 6 ರೋಮಿನಲ್ಲಿರುವ ನೀವು ಸಹ
ಯೇಸು ಕ್ರಿಸ್ತನವರಾಗುವುದಕ್ಕಾಗಿ ಕರೆಯಲ್ಪಟ್ಟಿದ್ದೀರಿ.
7 ರೋಮಿನಲ್ಲಿರುವವರೂ ದೇವರ ಪವಿತ್ರ ಜನರಾಗಿರು
ವುದಕ್ಕಾಗಿ ದೇವರಿಂದಲೇ ಕರೆಯಲ್ಪಟ್ಟವರೂ ಆಗಿರುವ
ನಿಮ್ಮೆಲ್ಲರಿಗೆ ಈ ಪತ್ರವನ್ನು ಬರೆಯುತ್ತಿದ್ದೇನೆ. ನೀವು ದೇವರಿಗೆ
ಪ್ರಿಯರಾದ ಜನರಾಗಿದ್ದೀರಿ. ನಮ್ಮ ತಂದೆಯಾದ ದೇವ
ರಿಂದಲೂ ಪ್ರಭುವಾದ ಯೇಸು ಕ್ರಿಸ್ತನಿಂದಲೂ ನಿಮಗೆ
ಕೃಪೆಯೂ ಶಾಂತಿಯೂ ಆಗಲಿ.

### ಕೃತಜ್ಞತಾ ಪ್ರಾರ್ಥನೆ

8 ಮೊದಲನೆಯದಾಗಿ, ನಾನು ನಿಮ್ಮೆಲ್ಲರ ವಿಷಯದಲ್ಲಿ
ಯೇಸು ಕ್ರಿಸ್ತನ ಮೂಲಕ ನನ್ನ ದೇವರಿಗೆ ಸ್ತೋತ್ರ ಸಲ್ಲಿಸುತ್ತೇನೆ.
ಏಕೆಂದರೆ ನಿಮ್ಮ ನಂಬಿಕೆಯು ಲೋಕದಲ್ಲೆಲ್ಲಾ ಪ್ರಖ್ಯಾತ
ವಾಗಿದೆ. 9-10 ನಾನು ಪ್ರಾರ್ಥಿಸುವಾಗಲೆಲ್ಲಾ ನಿಮ್ಮನ್ನು ಖಂಡಿತ
ವಾಗಿ ಜ್ಞಾಪಿಸಿಕೊಳ್ಳುತ್ತೇನೆ. ಇದು ಸತ್ಯವೆಂದು ದೇವರಿಗೆ
ಗೊತ್ತಿದೆ. ದೇವರ ಮಗನ ವಿಷಯವಾದ ಸುವಾರ್ತೆಯನ್ನು
ಜನರಿಗೆ ಸಾರುವುದರ ಮೂಲಕ ನಾನು ದೇವರನ್ನು ನನ್ನ
ಆತ್ಮದಲ್ಲಿ ಆರಾಧಿಸುವವನಾಗಿದ್ದೇನೆ. ದೇವರ ಚಿತ್ತದಿಂದ, ನಿಮ್ಮ
ಬಳಿಗೆ ಬರಲು ಅವಕಾಶವಾಗಬೇಕೆಂದು ಪ್ರಾರ್ಥಿಸುತ್ತೇನೆ.
11 ನಾನು ನಿಮ್ಮನ್ನು ನೋಡಲು, ನಿಮ್ಮನ್ನು ಬಲಗೊಳಿಸಲು,
ನಿಮಗೆ ಆತ್ಮಿಕ ಉಡುಗೊರೆಯನ್ನು ಕೊಡಲು ಅತ್ಯಾಸಕ್ತಿ
ಉಳ್ಳವನಾಗಿದ್ದೇನೆ. 12 ಅಂದರೆ ನಾವು ಹೊಂದಿರುವ ನಂಬಿಕೆ
ಯಿಂದ ನಾವು ಒಬ್ಬರಿಗೊಬ್ಬರು ಸಹಾಯ ಮಾಡಬೇಕೆಂಬುದು
ನನ್ನ ಅಪೇಕ್ಷೆ. ನಿಮ್ಮ ನಂಬಿಕೆ ನನಗೆ ಸಹಾಯ ಮಾಡುತ್ತದೆ ಮತ್ತು
ನನ್ನ ನಂಬಿಕೆ ನಿಮಗೆ ಸಹಾಯ ಮಾಡುತ್ತದೆ. 13 ಸಹೋದರ
ಸಹೋದರಿಯರೇ, ನಾನು ನಿಮ್ಮ ಬಳಿಗೆ ಬರಲು ಅನೇಕ ಸಲ
ಯೋಜನೆ ಮಾಡಿದೆನೆಂಬುದು ನಿಮಗೆ ತಿಳಿದಿರಲಿ. ಆದರೆ ನಿಮ್ಮ
ಬಳಿಗೆ ಬರಲು ನನಗೆ ಸಾಧ್ಯವಾಗಲಿಲ್ಲ. ನಾನು ನಿಮ್ಮ ಬಳಿಗೆ
ಬಂದು ಆತ್ಮಿಕವಾಗಿ ಬೆಳೆಯಲು ನಿಮಗೆ ಸಹಾಯ ಮಾಡ
ಬೇಕೆಂದಿದ್ದೆನು. ನಾನು ಯೆಹೂದ್ಯರಲ್ಲದ ಜನರಿಗೆ ಸಹಾಯ
ಮಾಡಿದಂತೆಯೇ ನಿಮಗೂ ಸಹಾಯ ಮಾಡಬೇಕೆಂದಿರುವೆ.
14 ನಾನು ಎಲ್ಲಾ ಜನರ ಅಂದರೆ ಗ್ರೀಕರ ಮತ್ತು ಗ್ರೀಕ
ರಲ್ಲದವರ, ಹಾಗೂ ಜ್ಞಾನಿಗಳ ಮತ್ತು ಮೂಢರ ಸೇವೆ
ಮಾಡಲೇಬೇಕು. 15 ಆದಕಾರಣ ರೋಮಿನಲ್ಲಿರುವ ನಿಮಗೆ
ಸುವಾರ್ತೆಯನ್ನು ತಿಳಿಸಲು ಬಹಳವಾಗಿ ಆಶಿಸುತ್ತೇನೆ.
16 ನಾನು ಸುವಾರ್ತೆಯ ವಿಷಯದಲ್ಲಿ ಹೆಮ್ಮೆಪಡುತ್ತೇನೆ.
ನಂಬುವ ಪ್ರತಿಯೊಬ್ಬರನ್ನು ರಕ್ಷಿಸುವುದಕ್ಕಾಗಿ ಅಂದರೆ ಮೊದಲ
ನೆಯದಾಗಿ, ಯೆಹೂದ್ಯರನ್ನು ಅನಂತರ ಯೆಹೂದ್ಯರಲ್ಲ
ದವರನ್ನು ಸಹ ರಕ್ಷಿಸುವುದಕ್ಕಾಗಿ ದೇವರು ಸುವಾರ್ತೆ ಎಂಬ
ಶಕ್ತಿಯನ್ನು ಉಪಯೋಗಿಸುತ್ತಾನೆ. 17 ಹೇಗೆಂದರೆ, ದೇವರಿಂದ
ದೊರೆಯುವ ನೀತಿಯು ಅದರಲ್ಲಿ ತೋರಿಬರುತ್ತದೆ. ಆ
ನೀತಿಯು ನಂಬಿಕೆಯ ಫಲವಾಗಿದ್ದು ನಂಬಿಕೆಯನ್ನು ಪ್ರಕಟಿಸು
ತ್ತದೆ. ಪವಿತ್ರ ಗ್ರಂಥವು ಹೇಳುವಂತೆ, ‘‘ನೀತಿವಂತನು ನಂಬಿಕೆ
ಯಿಂದಲೇ ಜೀವಿಸುತ್ತಾನೆ.’’*

### ಎಲ್ಲಾ ಜನರು ತಪ್ಪು ಮಾಡಿದ್ದಾರೆ

18 ದೇವರ ಕೋಪವು ಪರಲೋಕದಿಂದ ತೋರಿ ಬಂದಿದೆ.
ಜನರು ದೇವರಿಗೆ ವಿರೋಧವಾಗಿ ಮಾಡುವ ಎಲ್ಲಾ ಕೆಟ್ಟ ಮತ್ತು
ದುಷ್ಟ ಕಾರ್ಯಗಳ ಬಗ್ಗೆ ದೇವರು ಕೋಪ ಉಳ್ಳವನಾಗಿದ್ದಾನೆ.
ಅವರಿಗೆ ಸತ್ಯವು ತಿಳಿದಿದೆ, ಆದರೆ ಅವರು ತಮ್ಮ ದುಷ್ಟ ಜೀವಿತ
ಗಳಿಂದ ಸತ್ಯವನ್ನು ಅಡಗಿಸುತ್ತಾರೆ. 19 ದೇವರು ತನ್ನ ಕೋಪ
ವನ್ನು ತೋರಿಸುತ್ತಾನೆ, ಏಕೆಂದರೆ ದೇವರ ಬಗ್ಗೆ ತಿಳಿದುಕೊಳ್ಳ
ಬಹುದಾದ ಪ್ರತಿಯೊಂದನ್ನೂ ಅವರಿಗೆ ಸ್ಪಷ್ಟಪಡಿಸಲಾಗಿದೆ.
ಹೌದು, ತನ್ನ ಬಗ್ಗೆ ತಿಳಿದುಕೊಳ್ಳಬಹುದಾದ ಪ್ರತಿಯೊಂದನ್ನೂ
ದೇವರು ಜನರಿಗೆ ಸ್ಪಷ್ಟವಾಗಿ ತೋರಿಸಿದ್ದಾನೆ. 20 ಜನರು ದೇವರ
ನಿತ್ಯಶಕ್ತಿಯನ್ನಾಗಲಿ ಆತನ ದೈವತ್ವಗಳನ್ನಾಗಲಿ ಕಾಣಲಾರರು.

---

**ಅಪೊಸ್ತಲ** ವಿಶೇಷ ಸೇವೆಗಾಗಿ ಯೇಸುವಿನಿಂದ ಆರಿಸಲ್ಪಟ್ಟವನು.

**ದಾವೀದ** ಇಸ್ರೇಲಿನ ರಾಜ.

**ನೀತಿವಂತನು … ಬದುಕುತ್ತಾನೆ** ಹಬಕ್ಕೂಕ 2:4.

ಆದರೆ ಲೋಕದ ಆರಂಭದಿಂದಲೂ ಆ ಸಂಗತಿಗಳು ಜನರಿಗೆ
ಸುಲಭವಾಗಿ ಅರ್ಥವಾಗುತ್ತವೆ. ದೇವರು ಮಾಡಿದ ಸೃಷ್ಟಿಗಳಲ್ಲಿ
ಆ ಸಂಗತಿಗಳು ಸ್ಪಷ್ಟವಾಗಿವೆ. ಆದ್ದರಿಂದ ಜನರು ತಾವು ಮಾಡುವ
ಕೆಟ್ಟ ಕಾರ್ಯಗಳಿಗೆ ನೆವ ಹೇಳಲು ಸಾಧ್ಯವಿಲ್ಲ. 21ಜನರು
ದೇವರನ್ನು ತಿಳಿದಿದ್ದರೂ ದೇವರನ್ನು ಮಹಿಮೆಪಡಿಸಲಿಲ್ಲ,
ಆತನಿಗೆ ಕೃತಜ್ಞತೆಯನ್ನು ಸಲ್ಲಿಸಲಿಲ್ಲ. ಜನರ ಆಲೋಚನೆಯು
ನಿಷ್ಪ್ರಯೋಜಕವಾಯಿತು. ಅವರ ಮೂಢಮನಸ್ಸುಗಳು ಕತ್ತಲೆ
ಯಿಂದ ತುಂಬಿಹೋದವು. 22ಜನರು ತಮ್ಮನ್ನು ಜ್ಞಾನಿಗಳೆಂದು
ಹೇಳಿಕೊಂಡು ಮೂರ್ಖರಾದರು. 23ಸದಾಕಾಲ ಜೀವಿಸುವ
ದೇವರ ಮಹಿಮೆಯನ್ನು ಅವರು ಬಿಟ್ಟುಕೊಟ್ಟು ಮನುಷ್ಯ
ರಂತಿರುವ, ಪಕ್ಷಿಗಳಂತಿರುವ, ಪ್ರಾಣಿಗಳಂತಿರುವ, ಮತ್ತು ಹಾವು
ಗಳಂತಿರುವ ವಿಗ್ರಹಗಳನ್ನು ಮಾಡಿಕೊಂಡು ಅವುಗಳನ್ನು
ಆರಾಧಿಸತೊಡಗಿದರು.

24ಪಾಪಗಳಿಂದ ತುಂಬಿಹೋಗಿದ್ದ ಅವರು ದುಷ್ಟ ಕಾರ್ಯ
ಗಳನ್ನೇ ಮಾಡಬಯಸಿದರು. ಆದ್ದರಿಂದ ಪಾಪಮಾರ್ಗದಲ್ಲೇ
ಹೋಗಲೆಂದು ದೇವರು ಅವರನ್ನು ಬಿಟ್ಟುಬಿಟ್ಟನು. ಅದ
ರಿಂದಾಗಿ ಅವರು ತಮ್ಮ ತಮ್ಮಲ್ಲೇ ತಮ್ಮ ದೇಹಗಳಿಂದ ಲೈಂಗಿಕ
ಪಾಪಗಳನ್ನು ಮಾಡಿದರು. 25ಅವರು ದೇವರ ಸತ್ಯವನ್ನು
ತೊರೆದು ಸುಳ್ಳನ್ನು ಹಿಡಿದುಕೊಂಡರು; ಸೃಷ್ಟಿಸಲ್ಪಟ್ಟ ವಸ್ತು
ಗಳನ್ನು ಆರಾಧಿಸಿದರು; ಅವುಗಳ ಸೇವೆ ಮಾಡಿದರು. ಆದರೆ ಆ
ವಸ್ತುಗಳನ್ನು ಸೃಷ್ಟಿಸಿದ ದೇವರನ್ನು ಅವರು ಆರಾಧಿಸಲಿಲ್ಲ; ಆತನ
ಸೇವೆ ಮಾಡಲಿಲ್ಲ. ದೇವರಿಗೇ ನಿರಂತರ ಸ್ತುತಿಸ್ತೋತ್ರ
ಸಲ್ಲಬೇಕು. ಆಮೆನ್.

26ಅವರು ಆ ರೀತಿ ವರ್ತಿಸಿದ್ದರಿಂದಲೇ, ದೇವರು ಅವರನ್ನು
ನಾಚಿಕೆಕರವಾದ ಕಾಮಾಭಿಲಾಷೆಗೆ ಬಿಟ್ಟುಕೊಟ್ಟನು. ಅವರ
ಸ್ತ್ರೀಯರು ಪುರುಷರೊಂದಿಗೆ ಪಡೆಯುತ್ತಿದ್ದ ಸಹಜವಾದ
ಲೈಂಗಿಕ ಸಂಪರ್ಕವನ್ನು ನಿಲ್ಲಿಸಿ, ಸಲಿಂಗಕಾಮಿಗಳಾದರು.
27ಅದೇ ರೀತಿಯಲ್ಲಿ, ಪುರುಷರು ಸ್ತ್ರೀಯರೊಂದಿಗೆ ಪಡೆ
ಯುತ್ತಿದ್ದ ಸಹಜವಾದ ಲೈಂಗಿಕ ಸಂಪರ್ಕವನ್ನು ನಿಲ್ಲಿಸಿ ಉದ್ರೇಕ
ಗೊಂಡ ಸಲಿಂಗಕಾಮಿಗಳಾದರು. ಅವರು ತಮ್ಮ ದುರ್ನಡತೆಗೆ
ತಕ್ಕ ದಂಡನೆಯನ್ನು ತಮ್ಮ ದೇಹಗಳಿಗೆ ಬರಮಾಡಿಕೊಂಡರು.

28ದೇವರ ನಿಜ ಜ್ಞಾನವನ್ನು ಹೊಂದಿಕೊಳ್ಳಲು ಅವರಿಗೆ
ಇಷ್ಟವಿಲ್ಲದ್ದರಿಂದ ದೇವರು ಅವರನ್ನು ಅವರ ಅಯೋಗ್ಯ
ಭಾವಕ್ಕೆ ಒಪ್ಪಿಸಿಕೊಟ್ಟನು. ಆದ್ದರಿಂದ ಅವರು ತಾವು ಮಾಡ
ಬಾರದ ಕೆಲಸಗಳನ್ನು ಮಾಡುತ್ತಾರೆ. 29ಅವರಲ್ಲಿ ಪ್ರತಿಯೊಂದು
ಬಗೆಯ ಪಾಪ, ದುಷ್ಟತನ, ಸ್ವಾರ್ಥ, ದ್ವೇಷ, ಹೊಟ್ಟೆಕಿಚ್ಚು,
ಕೊಲೆ, ಹೊಡೆದಾಟ, ಸುಳ್ಳುನುಡಿ ಮತ್ತು ಕೆಟ್ಟ ಆಲೋಚನೆ
ಇವುಗಳೆಲ್ಲಾ ತುಂಬಿಕೊಂಡಿವೆ. ಅವರು ಹರಟೆ ಹೊಡೆಯು
ತ್ತಾರೆ; 30ಒಬ್ಬರ ಮೇಲೊಬ್ಬರು ಚಾಡಿ ಹೇಳುತ್ತಾರೆ; ದೇವರನ್ನು
ದ್ವೇಷಿಸುತ್ತಾರೆ. ಅವರು ಸೊಕ್ಕಿನವರೂ ಅಹಂಕಾರಿಗಳೂ ಮತ್ತು
ತಮ್ಮ ಬಗ್ಗೆ ಬಡಾಯಿ ಕೊಚ್ಚಿಕೊಳ್ಳುವವರೂ ಆಗಿದ್ದಾರೆ. ಅವರು
ಕೇಡಿನ ಮಾರ್ಗಗಳನ್ನು ಹುಡುಕುವವರೂ ತಂದೆತಾಯಿಗಳಿಗೆ
ಅವಿಧೇಯರೂ 31ಮೂರ್ಖರೂ ಆಗಿದ್ದಾರೆ. ಅವರು ತಾವು
ಕೊಟ್ಟ ಮಾತನ್ನು ನೆರವೇರಿಸದವರೂ ಬೇರೆಯವರಿಗೆ ಮಮತೆ
ಯನ್ನಾಗಲಿ ಕರುಣೆಯನ್ನಾಗಲಿ ತೋರದವರೂ ಆಗಿದ್ದಾರೆ.
32ಇಂಥವರಿಗೆ ಮರಣದಂಡನೆ ಆಗಬೇಕೆಂದು ದೇವರ ಧರ್ಮ
ಶಾಸ್ತ್ರ ಹೇಳುತ್ತದೆ ಎಂಬುದು ಅವರಿಗೆ ಗೊತ್ತಿದೆ. ಆದರೂ
ಅವರು ಇಂಥ ಕಾರ್ಯಗಳನ್ನು ಮಾಡುತ್ತಾರೆ ಮತ್ತು ಇಂಥ
ಕಾರ್ಯಗಳನ್ನು ಮಾಡುವ ಜನರಿಗೆ ಪ್ರೋತ್ಸಾಹ ನೀಡುತ್ತಾರೆ.

### ಯೆಹೂದ್ಯರು ಸಹ ಪಾಪಿಗಳು

2 “ಇತರ ಜನರಿಗೆ ತೀರ್ಪು ಮಾಡಬಲ್ಲೆವು” ಎಂದು ನಿಮ್ಮ
ವಿಷಯದಲ್ಲಿ ಯೋಚಿಸಿಕೊಳ್ಳಬೇಡಿ. ಏಕೆಂದರೆ ನೀವು
ಸಹ ಪಾಪಮಾಡಿ ಅಪರಾಧಿಗಳಾಗಿದ್ದೀರಿ. ನೀವು ಆ ಜನರಿಗೆ
ತೀರ್ಪುಮಾಡುತ್ತೀರಿ, ಆದರೆ ಅದೇ ಕಾರ್ಯಗಳನ್ನು ನೀವೂ
ಮಾಡುತ್ತೀರಿ. ಆದ್ದರಿಂದ ನೀವು ಅವರಿಗೆ ತೀರ್ಪು ಮಾಡುವಾಗ,
ನಿಜವಾಗಿಯೂ ನಿಮಗೇ ತೀರ್ಪು ಮಾಡಿಕೊಳ್ಳುವವ
ರಾಗಿದ್ದೀರಿ. 2ಅಪರಾಧಗಳನ್ನು ಮಾಡುವ ಜನರಿಗೆ ದೇವರು
ತೀರ್ಪುಮಾಡುತ್ತಾನೆ. ಆತನ ತೀರ್ಪು ನ್ಯಾಯವಾದುದೆಂದು
ನಮಗೆ ಗೊತ್ತಿದೆ. 3ಆ ಅಪರಾಧಗಳನ್ನು ಮಾಡುವ ಜನರಿಗೆ
ನೀವು ಸಹ ತೀರ್ಪು ಮಾಡುತ್ತೀರಿ. ಆದರೆ ನೀವೇ ಆ ಅಪರಾಧ
ಗಳನ್ನು ಮಾಡುತ್ತೀರಿ. ಹೀಗಿರಲು ದೇವರ ದಂಡನೆಯಿಂದ
ತಪ್ಪಿಸಿಕೊಳ್ಳಲು ಸಾಧ್ಯವೇ ಇಲ್ಲವೆಂದು ನಿಮಗೆ ನಿಶ್ಚಯವಾಗಿ
ತಿಳಿದಿದೆ. 4ದೇವರು ನಿಮ್ಮ ವಿಷಯದಲ್ಲಿ ಬಹು ಕನಿಕರ
ಉಳ್ಳವನಾಗಿದ್ದಾನೆ; ತಾಳ್ಮೆ ಉಳ್ಳವನಾಗಿದ್ದಾನೆ. ನೀವು ಮಾರ್ಪಾ
ಟಾಗಬೇಕೆಂದು ದೇವರು ನಿಮಗಾಗಿ ಕಾದುಕೊಂಡಿದ್ದಾನೆ.
ಆದರೆ ನೀವು ಆತನ ಕರುಣೆಯ ಬಗ್ಗೆ ಆಲೋಚಿಸುವುದೇ ಇಲ್ಲ.
ನೀವು ನಿಮ್ಮ ಹೃದಯಗಳನ್ನೂ ಜೀವಿತಗಳನ್ನೂ ಮಾರ್ಪಡಿಸಿ
ಕೊಳ್ಳಬೇಕಾಗುತ್ತದೆಯೆಂದು ದೇವರ ಕನಿಕರವನ್ನು ಅರ್ಥ
ಮಾಡಿಕೊಳ್ಳದೆ ಇದ್ದೀರಿ. 5ನೀವು ಕಠಿಣರಾಗಿದ್ದೀರಿ ಮತ್ತು
ಮೊಂಡರಾಗಿದ್ದೀರಿ. ಮಾರ್ಪಾಟಾಗಲು ನಿಮಗೆ ಇಷ್ಟವಿಲ್ಲ.
ಆದ್ದರಿಂದ ನಿಮಗೆ ಬರಲಿರುವ ದಂಡನೆಯನ್ನು ನೀವು ಹೆಚ್ಚು
ಹೆಚ್ಚು ಮಾಡಿಕೊಳ್ಳುತ್ತಿದ್ದೀರಿ. ದೇವರು ತನ್ನ ಕೋಪವನ್ನು
ತೋರಿಸುವ ದಿನದಲ್ಲಿ ನಿಮಗೆ ಆ ದಂಡನೆಯಾಗುವುದು. ಆ
ದಿನದಲ್ಲಿ ದೇವರ ನ್ಯಾಯವಾದ ತೀರ್ಪುಗಳನ್ನು ಜನರು
ನೋಡುವರು. 6ದೇವರು ಪ್ರತಿಯೊಬ್ಬರಿಗೂ ಅವರವರು
ಮಾಡಿದ ಕಾರ್ಯಗಳಿಗಾಗಿ ಬಹುಮಾನವನ್ನಾಗಲಿ ದಂಡನೆ
ಯನ್ನಾಗಲಿ ಕೊಡುವನು. 7ಕೆಲವು ಜನರು ಮಹಿಮೆಗಾಗಿ,
ಘನತೆಗಾಗಿ ಮತ್ತು ಅಮರತ್ವಕ್ಕಾಗಿ ಯಾವಾಗಲೂ ಸತ್ಕಾರ್ಯ
ಗಳನ್ನು ಮಾಡುತ್ತಾ ಜೀವಿಸುವರು. ದೇವರು ಆ ಜನರಿಗೆ
ನಿತ್ಯಜೀವವನ್ನು ಕೊಡುವನು. 8ಆದರೆ ಉಳಿದ ಜನರು ಸ್ವಾರ್ಥಿ
ಗಳಾಗಿದ್ದು, ಸತ್ಯವನ್ನು ಅನುಸರಿಸದೆ ದುಷ್ಟತ್ವವನ್ನು ಅನುಸರಿಸು
ವವರಾಗಿದ್ದಾರೆ. ಅವರ ಮೇಲೆ ದೇವರ ದಂಡನೆಯೂ
ಕೋಪವೂ ಬರುತ್ತದೆ. 9ಕೆಟ್ಟದ್ದನ್ನು ನಡೆಸುವ ಪ್ರತಿಯೊಬ್ಬ
ವ್ಯಕ್ತಿಗೂ ಅಂದರೆ ಮೊದಲನೆಯದಾಗಿ ಯೆಹೂದ್ಯರಿಗೆ,
ಅನಂತರ ಗ್ರೀಕರಿಗೆ ಸಹ ದೇವರು ಕಷ್ಟಸಂಕಟಗಳನ್ನು ಕೊಡು
ತ್ತಾನೆ. 10ಆದರೆ ಒಳ್ಳೆಯದನ್ನು ಮಾಡುವ ಪ್ರತಿಯೊಬ್ಬರಿಗೂ
ಅಂದರೆ ಮೊದಲನೆಯದಾಗಿ ಯೆಹೂದ್ಯರಿಗೆ, ಅನಂತರ
ಗ್ರೀಕರಿಗೆ ಸಹ ದೇವರು ಮಹಿಮೆಯನ್ನು, ಘನತೆಯನ್ನು ಮತ್ತು
ಶಾಂತಿಯನ್ನು ಕೊಡುವನು. 11ದೇವರು ಪಕ್ಷಪಾತ ಮಾಡದೆ
ಎಲ್ಲರಿಗೂ ಒಂದೇ ರೀತಿಯಲ್ಲಿ ತೀರ್ಪು ಕೊಡುತ್ತಾನೆ.

12ಧರ್ಮಶಾಸ್ತ್ರವನ್ನು ಹೊಂದಿರುವ ಜನರು ಮತ್ತು ಧರ್ಮ
ಶಾಸ್ತ್ರದ ಬಗ್ಗೆ ಕೇಳಿಯೂ ಇಲ್ಲದ ಜನರು ಪಾಪ ಮಾಡುವಾಗ
ಅವರಿಬ್ಬರಿಗೂ ಯಾವ ವ್ಯತ್ಯಾಸವಿರುವುದಿಲ್ಲ. ಧರ್ಮಶಾಸ್ತ್ರ

ವಿಲ್ಲದವರಾಗಿ ಪಾಪ ಮಾಡುವವರು ನಾಶವಾಗುವರು. ಅದೇ ರೀತಿಯಲ್ಲಿ, ಧರ್ಮಶಾಸ್ತ್ರವನ್ನು ಹೊಂದಿದ್ದರೂ ಪಾಪ ಮಾಡುವವರು ಧರ್ಮಶಾಸ್ತ್ರಕ್ಕನುಸಾರವಾಗಿ ತೀರ್ಪನ್ನು ಹೊಂದುವರು.

13ಧರ್ಮಶಾಸ್ತ್ರವನ್ನು ಕೇಳಿದ ಮಾತ್ರಕ್ಕೆ ಜನರು ನೀತಿವಂತರಾಗುವುದಿಲ್ಲ. ಧರ್ಮಶಾಸ್ತ್ರ ಹೇಳುವ ಪ್ರತಿಯೊಂದಕ್ಕೂ ವಿಧೇಯರಾಗುವ ಜನರನ್ನು ಧರ್ಮಶಾಸ್ತ್ರವು ನೀತಿವಂತರನ್ನಾಗಿ ಮಾಡುತ್ತದೆ. 14ಯೆಹೂದ್ಯರಲ್ಲದವರು ಧರ್ಮಶಾಸ್ತ್ರವನ್ನು ಹೊಂದಿಲ್ಲ. ಆದರೆ ಅವರು ಧರ್ಮಶಾಸ್ತ್ರವನ್ನು ಸ್ವಾಭಾವಿಕವಾಗಿ ಅನುಸರಿಸಿದ್ದೇಯಾದರೆ, ಅವರಿಗೆ ಧರ್ಮಶಾಸ್ತ್ರವಿಲ್ಲದಿದ್ದರೂ ಅವರ ಅಂತರಂಗವೇ ಅವರಿಗೆ ಧರ್ಮಶಾಸ್ತ್ರವಾಗುತ್ತದೆ. 15ಧರ್ಮಶಾಸ್ತ್ರದ ಆಜ್ಞಾವಿಧಿಗಳಿಗನುಸಾರವಾಗಿ ಯಾವುದು ಸರಿ, ಯಾವುದು ತಪ್ಪು ಎಂಬುದನ್ನು ತಮ್ಮ ಹೃದಯಗಳು ಬಲ್ಲವೆಂದು ಅವರು ತಮ್ಮ ನಡತೆಯಿಂದಲೇ ತೋರ್ಪಡಿಸುತ್ತಾರೆ. ಇದು ಸತ್ಯವೆಂಬುದನ್ನು ಅವರ ಮನಸ್ಸಾಕ್ಷಿಯು ಖಚಿತಪಡಿಸುತ್ತದೆ. ಅವರ ಅಂತಃಪ್ರಜ್ಞೆಯೇ ಅವರನ್ನು ದೋಷಿಗಳೆಂದೋ ಇಲ್ಲವೆ ನಿರ್ದೋಷಿಗಳೆಂದೋ ತೀರ್ಮಾನಿಸುತ್ತದೆ. 16ಮನುಷ್ಯರ ಅಂತರಂಗದಲ್ಲಿರುವ ರಹಸ್ಯ ಸಂಗತಿಗಳಿಗೆ ದೇವರು ತೀರ್ಪುಮಾಡುವ ದಿನದಂದು ಇವುಗಳೆಲ್ಲಾ ನೆರವೇರುವವು. ದೇವರು ಯೇಸು ಕ್ರಿಸ್ತನ ಮೂಲಕ ಜನರಿಗೆ ತೀರ್ಪು ಮಾಡುತ್ತಾನೆ ಎಂಬುದಾಗಿ ಸುವಾರ್ತೆಯು ತಿಳಿಸುತ್ತದೆ. ನಾನು ಜನರಿಗೆ ತಿಳಿಸುವುದು ಆ ಸುವಾರ್ತೆಯನ್ನೇ.

### ಯೆಹೂದ್ಯರು ಮತ್ತು ಧರ್ಮಶಾಸ್ತ್ರ

17‘‘ನಾನು ಯೆಹೂದ್ಯನು’’ ಎಂದು ಹೇಳಿಕೊಳ್ಳುತ್ತಿರುವ ನಿನ್ನ ವಿಷಯವಾದರೂ ಏನು? ಧರ್ಮಶಾಸ್ತ್ರದಲ್ಲಿ ನಂಬಿಕೆಯಿಟ್ಟು ದೇವರಿಗೆ ಸಮೀಪವಾಗಿರುವುದಾಗಿ ನೀನು ಹೆಮ್ಮೆಪಡುವೆ. 18ದೇವರ ಚಿತ್ತಕ್ಕನುಸಾರವಾದ ಕಾರ್ಯಗಳನ್ನು ಧರ್ಮಶಾಸ್ತ್ರದಿಂದ ಕಲಿತುಕೊಂಡಿರುವುದಾಗಿ ನೀನು ಹೇಳಿಕೊಳ್ಳುವೆ. 19ಸರಿಯಾದ ಮಾರ್ಗವನ್ನು ತಿಳಿದಿಲ್ಲದ ಜನರಿಗೆ ಮಾರ್ಗದರ್ಶಕನಾಗಿಯೂ ಕತ್ತಲೆಯಲ್ಲಿರುವ ಜನರಿಗೆ ಬೆಳಕಾಗಿಯೂ ಇರುವುದಾಗಿ ನಿನ್ನ ಕುರಿತು ಭಾವಿಸಿಕೊಂಡಿರುವೆ. 20ಯಾವುದು ಸರಿಯಾದದ್ದೆಂದು ಮೂಢರಿಗೆ ತೋರಿಸಬಲ್ಲವನಾಗಿಯೂ ಇನ್ನೂ ಕಲಿಯಬೇಕಾಗಿರುವ ಜನರಿಗೆ ಉಪಾಧ್ಯಾಯನಾಗಿರುವುದಾಗಿಯೂ ನೀನು ನಿನ್ನ ಬಗ್ಗೆ ಆಲೋಚಿಸಿಕೊಂಡಿರುವೆ. ನಿನ್ನಲ್ಲಿ ಧರ್ಮಶಾಸ್ತ್ರವಿದೆ, ಆದ್ದರಿಂದ ಪ್ರತಿಯೊಂದನ್ನೂ ತಿಳಿದುಕೊಂಡಿರುವುದಾಗಿಯೂ ಎಲ್ಲಾ ಸತ್ಯವನ್ನು ಹೊಂದಿಕೊಂಡಿರುವದಾಗಿಯೂ ನೀನು ಭಾವಿಸಿಕೊಂಡಿರುವೆ.

21ನೀನು ಬೇರೆಯವರಿಗೆ ಉಪದೇಶಿಸುವೆ. ಹೀಗಿರಲು ನೀನು ನಿನಗೇ ಉಪದೇಶ ಮಾಡಿಕೊಳ್ಳಬಾರದೇಕೆ? ಕದಿಯಬಾರದೆಂದು ನೀನು ಜನರಿಗೆ ಹೇಳುವೆ, ಆದರೆ ನೀನೇ ಕದಿಯುವೆ. 22ಜನರು ವ್ಯಭಿಚಾರವೆಂಬ ಪಾಪವನ್ನು ಮಾಡಕೂಡದೆಂದು ನೀನು ಹೇಳುವೆ, ಆದರೆ ನೀನೇ ಆ ಪಾಪ ಮಾಡಿ ಅಪರಾಧಿಯಾಗಿರುವೆ. ನೀನು ವಿಗ್ರಹಗಳನ್ನು ದ್ವೇಷಿಸುವೆ, ಆದರೆ ನೀನೇ ಅವುಗಳನ್ನು ಗುಡಿಗಳಿಂದ ಕದಿಯುವೆ. 23ನೀನು ದೇವರ ಧರ್ಮಶಾಸ್ತ್ರದ ಬಗ್ಗೆ ಹೆಮ್ಮೆಪಡುವೆ. ಆದರೆ ಆ ಧರ್ಮಶಾಸ್ತ್ರವನ್ನು ಉಲ್ಲಂಘಿಸಿ ದೇವರಿಗೆ ಅವಮಾನ ಮಾಡುವೆ. 24‘‘ಯೆಹೂದ್ಯರಾದ ನಿಮ್ಮ ದೆಸೆಯಿಂದ ಯೆಹೂದ್ಯರಲ್ಲದ ಜನರು ದೇವರ ಹೆಸರಿಗೆ ವಿರೋಧವಾಗಿ ಮಾತಾಡುತ್ತಾರೆ’’* ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.

25ನೀನು ಧರ್ಮಶಾಸ್ತ್ರವನ್ನು ಅನುಸರಿಸಿದರೆ ನೀನು ಮಾಡಿಸಿಕೊಂಡ ಸುನ್ನತಿಗೆ ಅರ್ಥವಿದೆ. ಆದರೆ ನೀನು ಧರ್ಮಶಾಸ್ತ್ರವನ್ನು ಮೀರಿ ನಡೆದರೆ ನಿನಗೆ ಸುನ್ನತಿಯಾಗಿಲ್ಲದಂತೆಯೇ ಆಯಿತು. 26ಯೆಹೂದ್ಯರಲ್ಲದ ಜನರಿಗೆ ಸುನ್ನತಿಯಾಗಿಲ್ಲ, ಆದರೆ ಧರ್ಮಶಾಸ್ತ್ರವು ಹೇಳುವುದನ್ನು ಅವರು ಮಾಡುವುದಾದರೆ, ಅವರು ಸುನ್ನತಿಯನ್ನು ಹೊಂದಿದಂಥವರಾದರು. 27ಯೆಹೂದ್ಯರಾದ ನಿಮಗೆ ಲಿಖಿತ ಧರ್ಮಶಾಸ್ತ್ರವಿದೆ ಮತ್ತು ಸುನ್ನತಿಯಾಗಿದೆ. ಆದರೆ ನೀವು ಧರ್ಮಶಾಸ್ತ್ರವನ್ನು ಮೀರಿ ನಡೆಯುತ್ತೀರಿ. ಹೀಗಿರಲು, ದೇಹದಲ್ಲಿ ಸುನ್ನತಿಯನ್ನು ಹೊಂದಿಲ್ಲದಿದ್ದರೂ ಧರ್ಮಶಾಸ್ತ್ರಕ್ಕೆ ವಿಧೇಯರಾಗುವ ಜನರು ನಿಮ್ಮನ್ನು ಅಪರಾಧಿಗಳೆಂದು ತೋರ್ಪಡಿಸುತ್ತಾರೆ.

28ಕೇವಲ ಬಾಹ್ಯ ದೇಹದಲ್ಲಿ ಯೆಹೂದ್ಯನಾಗಿರುವವನು ಯೆಹೂದ್ಯನಲ್ಲ. ಕೇವಲ ದೇಹದ ಹೊರಭಾಗದ ಸುನ್ನತಿಯು ನಿಜವಾದ ಸುನ್ನತಿಯಲ್ಲ. 29ಅಂತರಂಗದಲ್ಲಿ ಯೆಹೂದ್ಯನಾಗಿರುವವನು ಮಾತ್ರ ನಿಜವಾದ ಯೆಹೂದ್ಯನು. ಹೃದಯದಲ್ಲಿ ಆದ ಸುನ್ನತಿಯೇ ನಿಜವಾದ ಸುನ್ನತಿ. ಈ ಸುನ್ನತಿಯಾದದ್ದು ಪವಿತ್ರಾತ್ಮನಿಂದಲೇ ಹೊರತು ಲಿಖಿತ ಧರ್ಮಶಾಸ್ತ್ರದಿಂದಲ್ಲ. ಪವಿತ್ರಾತ್ಮನಿಂದ ಹೃದಯದಲ್ಲಿ ಸುನ್ನತಿ ಹೊಂದಿರುವ ವ್ಯಕ್ತಿಯು ಹೊಗಳಿಕೆಯನ್ನು ಪಡೆಯುವುದು ದೇವರಿಂದಲೇ ಹೊರತು ಮನುಷ್ಯರಿಂದಲ್ಲ.

3 ಹೀಗಿರಲು, ಯೆಹೂದ್ಯರ ವೈಶಿಷ್ಟ್ಯವೇನು? ಸುನ್ನತಿ ಮಾಡಿಸಿಕೊಂಡಿರುವುದರಲ್ಲಿ ಏನಾದರೂ ವಿಶೇಷತೆಯಿದೆಯೇ? 2ಹೌದು, ಯೆಹೂದ್ಯರಿಗೆ ಅನೇಕ ವಿಶೇಷತೆಗಳಿವೆ. ಎಲ್ಲಕ್ಕಿಂತಲೂ ಅತಿಮುಖ್ಯವಾದದ್ದೇನಂದರೆ, ದೇವರು ಯೆಹೂದ್ಯರಲ್ಲಿ ಭರವಸವಿಟ್ಟು ತನ್ನ ಉಪದೇಶಗಳನ್ನು ಅವರಿಗೆ ಕೊಟ್ಟನು. 3ಕೆಲವು ಯೆಹೂದ್ಯರು ದೇವರಿಗೆ ನಂಬಿಗಸ್ತರಾಗಿರಲಿಲ್ಲ ಎಂಬುದೇನೊ ಸತ್ಯ. ಆದರೆ ದೇವರು ತಾನು ಮಾಡಿದ ವಾಗ್ದಾನವನ್ನು ನೆರವೇರಿಸದಂತೆ ಅದು ಮಾಡುತ್ತದೆಯೇ? 4ಇಲ್ಲ! ಪ್ರತಿಯೊಬ್ಬ ವ್ಯಕ್ತಿ ಸುಳ್ಳುಗಾರನಾದರೂ ದೇವರು ಸತ್ಯವಂತನಾಗಿಯೇ ಇರುತ್ತಾನೆ. ಪವಿತ್ರ ಗ್ರಂಥವು ಹೀಗೆಂದು ಹೇಳುತ್ತದೆ;

> ‘‘ನಿನ್ನ ಮಾತುಗಳಲ್ಲಿ ನೀನು ನ್ಯಾಯಸ್ಥನೆಂದು
> ನಿರೂಪಿತನಾಗಬೇಕು. ನಿನಗೆ ತೀರ್ಪಾಗುವಾಗ
> ನೀನು ಜಯಗಳಿಸಬೇಕು.’’
>
> *ಕೀರ್ತನೆ 51:4*

5ದೇವರು ನ್ಯಾಯವಂತನೆಂಬುದನ್ನು ನಾವು ಮಾಡುವ ತಪ್ಪು ಮತ್ತಷ್ಟು ಸ್ಪಷ್ಟವಾಗಿ ತೋರ್ಪಡಿಸುತ್ತದೆ. ಹೀಗಿರಲು, ದೇವರು ನಮ್ಮನ್ನು ಶಿಕ್ಷಿಸುವಾಗ, ಆತನು ಅನ್ಯಾಯ ಮಾಡುತ್ತಿದ್ದಾನೆಂದು ನಾವು ಹೇಳಲು ಸಾಧ್ಯವೇ? (ಬೇರೆ ಕೆಲವು ಜನರಿಗೆ ಇರ

---

**ಯೆಹೂದ್ಯರಾದ … ಮಾತಾಡುತ್ತಾರೆ** ಯೆಶಾಯ 52:5, ಯೆಹೆಜ್ಕೇಲ 36:20.

ಬಹುದಾದ ಆಲೋಚನೆಯನ್ನೇ ನಾನು ಇಲ್ಲಿ ಹೇಳುತ್ತಿದ್ದೇನೆ.)
[6]ಇಲ್ಲ! ದೇವರು ನಮ್ಮನ್ನು ದಂಡಿಸಲಾಗದಿದ್ದರೆ, ದೇವರು
ಲೋಕಕ್ಕೆ ತೀರ್ಪು ಮಾಡಲಾಗುವುದಿಲ್ಲ.

[7]‘‘ನಾನಾಡುವ ಸುಳ್ಳು ದೇವರ ಸತ್ಯವನ್ನು ತೋರಿಸುವು
ದಾದರೆ ನನ್ನ ಸುಳ್ಳಿನಿಂದ ದೇವರಿಗೆ ನಿಜವಾಗಿಯೂ ಮಹಿಮೆ
ಯಾಗುತ್ತದೆ. ಹೀಗಿರಲು ನನಗೆ ‘ಪಾಪಿ’ ಎಂಬ ತೀರ್ಪಾಗುವು
ದೇಕೆ?’’ ಎಂದು ಒಬ್ಬನು ಕೇಳಬಹುದು. [8]‘‘ಒಳ್ಳೆಯದಾಗು
ವಂತೆ ನಾವು ಕೇಡು ಮಾಡೋಣ’’ ಎಂದು ಹೇಳುವುದಕ್ಕೂ
ಅದಕ್ಕೂ ಯಾವ ವ್ಯತ್ಯಾಸವಿಲ್ಲ. ಅನೇಕ ಜನರು ನಮ್ಮನ್ನು ಟೀಕಿ
ಸುತ್ತಾರೆ ಮತ್ತು ನಾವು ಅಂಥ ಸಂಗತಿಗಳನ್ನು ಬೋಧಿಸುತ್ತೇವೆ
ಎಂದು ಹೇಳುತ್ತಾರೆ. ಆ ಜನರು ತಪ್ಪಿತಸ್ಥರಾಗಿದ್ದಾರೆ. ಅವರಿಗೆ
ದಂಡನೆಯಾಗಲೇಬೇಕು.

### ಎಲ್ಲಾ ಜನರು ಅಪರಾಧಿಗಳಾಗಿದ್ದಾರೆ

[9]ಹೀಗಿರಲು, ಯೆಹೂದ್ಯರಾದ ನಾವು ಬೇರೆಯವರಿಗಿಂತ
ಉತ್ತಮರಾಗಿದ್ದೇವೊ? ಇಲ್ಲ! ಯೆಹೂದ್ಯರಿಗೂ ಯೆಹೂದ್ಯ
ರಲ್ಲದವರಿಗೂ ಯಾವ ವ್ಯತ್ಯಾಸವಿಲ್ಲವೆಂದು ಆಗಲೇ ನಿರೂಪಿಸಿ
ದ್ದೇನೆ. ಅವರೆಲ್ಲರೂ ಪಾಪಮಾಡಿ ಅಪರಾಧಿಗಳಾಗಿದ್ದಾರೆ.
[10]ಪವಿತ್ರ ಗ್ರಂಥವು ಹೀಗೆ ಹೇಳುತ್ತದೆ:

‘‘ಪಾಪವಿಲ್ಲದ ಒಬ್ಬನೂ ಇಲ್ಲ. ಇಲ್ಲವೇ ಇಲ್ಲ!
[11] ಅರ್ಥಮಾಡಿಕೊಳ್ಳುವ ಒಬ್ಬನೂ ಇಲ್ಲ. ದೇವ
ರೊಂದಿಗಿರಲು ನಿಜವಾಗಿ ಬಯಸುವ ಒಬ್ಬನೂ
ಇಲ್ಲ. ಎಲ್ಲಾ ಜನರು ದಾರಿ ತಪ್ಪಿದ್ದಾರೆ.
[12] ಎಲ್ಲಾ ಜನರು ಅಯೋಗ್ಯರಾಗಿದ್ದಾರೆ. ಒಳ್ಳೆಯ
ದನ್ನು ಮಾಡುವ ಒಬ್ಬನೂ ಇಲ್ಲ, ಇಲ್ಲವೇ
ಇಲ್ಲ!’’

*ಕೀರ್ತನೆ 14:1-3*

[13]‘‘ಜನರ ಬಾಯಿಗಳು ತೆರೆದ ಸಮಾಧಿಗಳಂತಿವೆ.
ಅವರು ಸುಳ್ಳು ಹೇಳಲು ತಮ್ಮ ನಾಲಿಗೆಗಳನ್ನು
ಬಳಸುತ್ತಾರೆ.’’

*ಕೀರ್ತನೆ 5:9*

‘‘ಅವರು ಹೇಳುವ ಸಂಗತಿಗಳು ವಿಷಪೂರಿತವಾದ
ಹಾವುಗಳಂತಿವೆ.’’

*ಕೀರ್ತನೆ 140:3*

[14]‘‘ಅವರ ಬಾಯಿಗಳಲ್ಲಿ ಶಾಪವೂ
ಕಠೋರತೆಯೂ ತುಂಬಿವೆ.’’

*ಕೀರ್ತನೆ 10:7*

[15]‘‘ಹಿಂಸಿಸಲು ಮತ್ತು ಕೊಲ್ಲಲು ಜನರು
ಯಾವಾಗಲೂ ಸಿದ್ಧರಾಗಿದ್ದಾರೆ.
[16] ಅವರು ಹೋದಲ್ಲೆಲ್ಲಾ ನಾಶನವನ್ನೂ ಸಂಕಟ
ವನ್ನೂ ಬರಮಾಡುತ್ತಾರೆ.
[17] ಜನರು ಶಾಂತಿಯ ಮಾರ್ಗವನ್ನು ತಿಳಿದಿಲ್ಲ.’’

*ಯೆಶಾಯ 59:7-8*

[18]‘‘ಅವರಿಗೆ ದೇವರಲ್ಲಿ ಭಯವಾಗಲಿ ಗೌರವ
ವಾಗಲಿ ಇಲ್ಲ.’’

*ಕೀರ್ತನೆ 36:1*

[19]ಧರ್ಮಶಾಸ್ತ್ರದ ಅಧೀನದಲ್ಲಿರುವ ಜನರ ವಿಷಯ
ವಾಗಿಯೇ ಧರ್ಮಶಾಸ್ತ್ರವು ಈ ಸಂಗತಿಗಳನ್ನು ಹೇಳುತ್ತಿದೆ.
ಆದ್ದರಿಂದ ಯೆಹೂದ್ಯರು ನೆವ ಹೇಳಲು ಸಾಧ್ಯವಿಲ್ಲ. ಅಲ್ಲದೆ
ಇಡೀ ಲೋಕವೇ ದೇವರ ನ್ಯಾಯತೀರ್ಪಿಗೆ ಒಳಗಾಗಿದೆ.
[20]ಏಕೆಂದರೆ ಧರ್ಮಶಾಸ್ತ್ರವನ್ನು ಅನುಸರಿಸುವುದರ ಮೂಲಕ
ನೀತಿವಂತರಾಗಲು ಯಾರಿಗೂ ಸಾಧ್ಯವಿಲ್ಲ. ಧರ್ಮಶಾಸ್ತ್ರವು
ನಮ್ಮ ಪಾಪವನ್ನು ಮಾತ್ರ ತೋರ್ಪಡಿಸುತ್ತದೆ.

### ದೇವರು ಜನರನ್ನು ನೀತಿವಂತರನ್ನಾಗಿ ಮಾಡುವ ಬಗೆ

[21]ಆದರೆ ಈಗ ದೇವರು ಧರ್ಮಶಾಸ್ತ್ರದ ನೆರವಿಲ್ಲದೆಯೇ
ಜನರನ್ನು ನೀತಿವಂತರನ್ನಾಗಿ ಮಾಡುವ ಮಾರ್ಗವನ್ನು
ತೋರಿಸಿದ್ದಾನೆ. ಧರ್ಮಶಾಸ್ತ್ರ ಮತ್ತು ಪ್ರವಾದಿಗಳು ಈ ಹೊಸ
ಮಾರ್ಗದ ಬಗ್ಗೆ ನಮಗೆ ಹೇಳಿದ್ದಾರೆ. [22]ನಂಬಿಕೆಯ
ಮೂಲಕವಾಗಿ ಅಂದರೆ ಯೇಸು ಕ್ರಿಸ್ತನಲ್ಲಿ ನಂಬಿಕೆ ಇಡುವ
ಎಲ್ಲಾ ಜನರನ್ನು ದೇವರು ನೀತಿವಂತರನ್ನಾಗಿ ಮಾಡುತ್ತಾನೆ.
ಆತನಿಗೆ ಎಲ್ಲಾ ಜನರು ಒಂದೇ. [23]ಎಲ್ಲರೂ ಪಾಪ ಮಾಡಿ
ದೇವರ ಮಹಿಮೆಯನ್ನು ಹೊಂದದವರಾಗಿದ್ದಾರೆ. [24]ಅವರು
ನೀತಿವಂತರೆಂದು ನಿರ್ಣಯ ಹೊಂದುವುದು ದೇವರ ಉಚಿ
ತಾರ್ಥವಾದ ಕೃಪೆಯಿಂದಲೇ. ದೇವರು ಯೇಸು ಕ್ರಿಸ್ತನ
ಮೂಲಕವಾಗಿ ಜನರನ್ನು ಪಾಪದಿಂದ ಬಿಡುಗಡೆ ಮಾಡಿ,
ನೀತಿವಂತರನ್ನಾಗಿ ಮಾಡುತ್ತಾನೆ. [25]ದೇವರು ನಂಬಿಕೆಯ
ಮೂಲಕ ಜನರ ಪಾಪಗಳನ್ನು ಕ್ಷಮಿಸುವ ಮಾರ್ಗವನ್ನು
ಮಾಡಿದ್ದಾನೆ. ಆ ಮಾರ್ಗವೇ ಯೇಸು. ದೇವರು ಯೇಸುವಿನ
ರಕ್ತದ ಮೂಲಕ ಪಾಪವನ್ನು ಕ್ಷಮಿಸುತ್ತಾನೆ. ದೇವರು
ಮಾಡುವಂಥದ್ದು ಯಾವಾಗಲೂ ಸರಿಯಾಗಿರುತ್ತದೆ ಮತ್ತು
ನ್ಯಾಯಬದ್ಧವಾಗಿರುತ್ತದೆ ಎಂಬುದನ್ನು ಇದು ತೋರಿಸುತ್ತದೆ.
ದೇವರು ಹಿಂದಿನ ಕಾಲದಲ್ಲಿ ತಾಳ್ಮೆಯಿಂದಿದ್ದು ಜನರನ್ನು ಅವರ
ಪಾಪಗಳಿಗಾಗಿ ದಂಡಿಸದೆ ಹೋದಾಗಲೂ ದೇವರು
ನೀತಿವಂತನಾಗಿದ್ದನು. [26]ಹೀಗೆ ದೇವರು ತಾನೇ ನೀತಿವಂತ
ನೆಂಬುದನ್ನು ಮತ್ತು ಯೇಸುವಿನಲ್ಲಿ ನಂಬಿಕೆಯಿಡುವ
ಯಾವನನ್ನೇ ಆಗಲಿ ನೀತಿವಂತನನ್ನಾಗಿ ಮಾಡುವುದಾಗಿಯೂ
ನಿರೂಪಿಸಿದ್ದಾನೆ.

[27]ಹೀಗಿರಲು, ನಮ್ಮ ಬಗ್ಗೆ ಹೊಗಳಿಕೊಳ್ಳಲು ನಮಗೆ
ಏನಾದರೂ ಕಾರಣಗಳಿವೆಯೋ? ಇಲ್ಲ! ಏಕೆ? ಎಲ್ಲಾ
ಹೊಗಳಿಕೆಯನ್ನು ನಿಲ್ಲಿಸುವಂಥದ್ದು ನಂಬಿಕೆಯ ಮಾರ್ಗವೇ
ಹೊರತು ಧರ್ಮಶಾಸ್ತ್ರವನ್ನು ಅನುಸರಿಸುವ ಮಾರ್ಗವಲ್ಲ.
[28]ಏಕೆಂದರೆ ಒಬ್ಬನು ನೀತಿವಂತನಾಗುವುದು ನಂಬಿಕೆಯ
ಮೂಲಕವೇ ಹೊರತು ಧರ್ಮಶಾಸ್ತ್ರವನ್ನು ಅನುಸರಿಸಲು
ಅವನು ಮಾಡಿದ ಕಾರ್ಯಗಳಿಂದಲ್ಲ. ನಾವು ನಂಬುವುದೂ
ಇದನ್ನೇ. [29]ದೇವರು ಕೇವಲ ಯೆಹೂದ್ಯರ ದೇವರಲ್ಲ. ಆತನು
ಯೆಹೂದ್ಯರಲ್ಲದವರಿಗೂ ಸಹ ದೇವರಾಗಿದ್ದಾನೆ. [30]ದೇವರು
ಒಬ್ಬನೇ. ಆತನು ಯೆಹೂದ್ಯರನ್ನೂ ಯೆಹೂದ್ಯರಲ್ಲದವರನ್ನೂ
ಅವರ ನಂಬಿಕೆಯ ಮೂಲಕ ನೀತಿವಂತರನ್ನಾಗಿ ಮಾಡುತ್ತಾನೆ.

31ಹೀಗಿರಲು, ನಂಬಿಕೆಯ ಮಾರ್ಗವನ್ನು ಅನುಸರಿಸುವುದರ
ಮೂಲಕ ನಾವು ಧರ್ಮಶಾಸ್ತ್ರವನ್ನು ಅಲ್ಲಗಳೆಯುತ್ತೇವೊ?
ಇಲ್ಲ! ನಾವು ಧರ್ಮಶಾಸ್ತ್ರವನ್ನು ಸಮರ್ಥಿಸುತ್ತೇವೆ.

## ಅಬ್ರಹಾಮನ ಉದಾಹರಣೆ

4 ಹಾಗಾದರೆ, ನಮ್ಮ ಪಿತೃವಾದ ಅಬ್ರಹಾಮನ ಬಗ್ಗೆ ನಾವು
ಏನು ಹೇಳೋಣ? ಅವನು ನಂಬಿಕೆಯ ಬಗ್ಗೆ ಏನು
ಕಲಿತುಕೊಂಡನು? 2ಅವನು ತನ್ನ ಕ್ರಿಯೆಗಳಿಂದ ನೀತಿವಂತ
ನಾಗಿದ್ದರೆ ಹೊಗಳಿಕೊಳ್ಳಲು ಅವನಿಗೆ ಕಾರಣವಿರುತ್ತಿತ್ತು.
ಆದರೆ ಅಬ್ರಹಾಮನು ದೇವರ ಮುಂದೆ ಹೊಗಳಿಕೊಳ್ಳಲು
ಆಗಲಿಲ್ಲ. 3“ಅಬ್ರಹಾಮನು ದೇವರನ್ನು ನಂಬಿದನು. ದೇವರು
ಅಬ್ರಹಾಮನ ನಂಬಿಕೆಯನ್ನು ಸ್ವೀಕರಿಸಿದನು. ಇದು
ಅಬ್ರಹಾಮನನ್ನು ನೀತಿವಂತನನ್ನಾಗಿ ಮಾಡಿತು”* ಎಂದು
ಪವಿತ್ರ ಗ್ರಂಥವು ಹೇಳುತ್ತದೆ.

4ದುಡಿದವನಿಗೆ ದೊರೆಯುವ ಸಂಬಳ ಉಡುಗೊರೆಯಲ್ಲ,
ಅದು ಅವನಿಗೆ ಸಲ್ಲತಕ್ಕದ್ದೇ ಆಗಿದೆ. 5ಆದರೆ ಒಬ್ಬನು ತಾನು
ಮಾಡುವ ಯಾವುದೇ ಕಾರ್ಯದ ಮೂಲಕವಾಗಲಿ ತನ್ನನ್ನು
ನೀತಿವಂತನನ್ನಾಗಿ ಮಾಡಿಕೊಳ್ಳಲಾರನು. ಆದ್ದರಿಂದ ಆ ವ್ಯಕ್ತಿ
ದೇವರಲ್ಲಿ ನಂಬಿಕೆ ಇಡಲೇಬೇಕು. ಆಗ ದೇವರು ಆ ವ್ಯಕ್ತಿಯ
ನಂಬಿಕೆಯನ್ನು ಸ್ವೀಕರಿಸಿಕೊಂಡು ಅವನನ್ನು ನೀತಿವಂತನನ್ನಾಗಿ
ಮಾಡುವನು. ದೇವರು ದುಷ್ಟರನ್ನು ಸಹ ನೀತಿವಂತರನ್ನಾಗಿ
ಮಾಡುವನು. 6ದೇವರು ಒಬ್ಬನ ಒಳ್ಳೆಯ ಕಾರ್ಯಗಳನ್ನು ಲಕ್ಷಿ
ಸದೆ ಅವನನ್ನು ನೀತಿವಂತನೆಂದು ಒಪ್ಪಿಕೊಂಡರೆ ಅವನು ನಿಜ
ವಾಗಿಯೂ ಭಾಗ್ಯವಂತನೆಂದು ದಾವೀದನು ಸಹ ಹೇಳಿದ್ದಾನೆ:

7“ಯಾರ ಅಪರಾಧಗಳು ಕ್ಷಮಿಸಲ್ಪಟ್ಟಿವೆಯೋ
ಯಾರ ಅಪರಾಧಗಳು ಮುಚ್ಚಲ್ಪಟ್ಟಿವೆಯೋ
ಅವರು ನಿಜವಾಗಿಯೂ ಭಾಗ್ಯವಂತರು!
8 ಪ್ರಭುವು ಯಾವನ ಪಾಪವನ್ನು ಪರಿಗಣಿಸುವು
ದಿಲ್ಲವೋ ಅವನು ನಿಜವಾಗಿಯೂ ಭಾಗ್ಯ
ವಂತನು!”

*ಕೀರ್ತನೆ 32:1-2*

9ಈ ಭಾಗ್ಯವಿರುವುದು ಸುನ್ನತಿ* ಮಾಡಿಸಿಕೊಂಡವರಿಗೆ
(ಯೆಹೂದ್ಯರಿಗೆ) ಮಾತ್ರವೋ? ಅಥವಾ ಸುನ್ನತಿ ಮಾಡಿಸಿ
ಕೊಂಡಿಲ್ಲದವರಿಗೂ (ಯೆಹೂದ್ಯರಲ್ಲದವರಿಗೂ) ಸಹ ಈ
ಭಾಗ್ಯವಿದೆಯೋ? ದೇವರು ಅಬ್ರಹಾಮನ ನಂಬಿಕೆಯನ್ನು
ಸ್ವೀಕರಿಸಿಕೊಂಡನೆಂದು ನಾವು ಆಗಲೇ ಹೇಳಿದ್ದೇವೆ. ಆ
ನಂಬಿಕೆಯೇ ಅವನನ್ನು ನೀತಿವಂತನನ್ನಾಗಿ ಮಾಡಿತು. 10ಆದರೆ
ಇದು ಯಾವಾಗ ಆಯಿತು? ದೇವರು ಅಬ್ರಹಾಮನನ್ನು
ಸ್ವೀಕರಿಸಿಕೊಂಡದ್ದು ಸುನ್ನತಿಯಾಗುವುದಕ್ಕಿಂತ ಮೊದಲೋ
ಅಥವಾ ಸುನ್ನತಿಯಾದ ಮೇಲೋ? ದೇವರು ಅವನನ್ನು
ಸ್ವೀಕರಿಸಿಕೊಂಡದ್ದು ಸುನ್ನತಿಯಾಗುವುದಕ್ಕಿಂತ ಮೊದಲೇ.
11ದೇವರು ತನ್ನನ್ನು ಸ್ವೀಕರಿಸಿಕೊಂಡಿದ್ದಾನೆ ಎಂಬುದನ್ನು
ತೋರಿಸುವುದಕ್ಕಾಗಿ ಅನಂತರ ಅಬ್ರಹಾಮನು ಸುನ್ನತಿ ಮಾಡಿಸಿ
ಕೊಂಡನು. ಅಬ್ರಹಾಮನು ಸುನ್ನತಿ ಮಾಡಿಸಿಕೊಳ್ಳುವುದಕ್ಕಿಂತ
ಮೊದಲೇ ನಂಬಿಕೆಯ ಮೂಲಕ ನೀತಿವಂತನಾಗಿದ್ದನು ಎಂಬು
ದಕ್ಕೆ ಅವನ ಸುನ್ನತಿಯೇ ಆಧಾರವಾಗಿದೆ. ಆದಕಾರಣ ನಂಬುವ
ಎಲ್ಲಾ ಜನರಿಗೆ, ಅವರು ಸುನ್ನತಿ ಮಾಡಿಸಿಕೊಂಡಿಲ್ಲದಿದ್ದರೂ
ಅಬ್ರಹಾಮನು ತಂದೆಯಾಗಿದ್ದಾನೆ. ಏಕೆಂದರೆ ಅವರು ತಮ್ಮ
ನಂಬಿಕೆಯ ಮೂಲಕ ನೀತಿವಂತರೆಂದು ಎಣಿಸಲ್ಪಡುವರು.
12ಅಲ್ಲದೆ ಸುನ್ನತಿ ಮಾಡಿಸಿಕೊಂಡಿರುವ ಜನರಿಗೂ ಸಹ
ಅಬ್ರಹಾಮನು ತಂದೆಯಾಗಿದ್ದಾನೆ. ಆದರೆ ಅವನನ್ನು ಅವರ
ತಂದೆಯನ್ನಾಗಿ ಮಾಡುವಂಥದ್ದು ಅವರ ಸುನ್ನತಿಯಲ್ಲ. ನಮ್ಮ
ತಂದೆಯಾದ ಅಬ್ರಹಾಮನು ಸುನ್ನತಿ ಮಾಡಿಸಿಕೊಳ್ಳುವ
ಮೊದಲು ಹೊಂದಿದ್ದ ನಂಬಿಕೆಗನುಸಾರವಾಗಿ ಅವರು ಜೀವಿ
ಸಿದರೆ ಮಾತ್ರ ಅವನು ಅವರ ತಂದೆಯಾಗಿದ್ದಾನೆ.

## ದೇವರ ವಾಗ್ದಾನವನ್ನು ಹೊಂದಿಕೊಳ್ಳಲು ನಂಬಿಕೆಯೇ ಮಾರ್ಗ

13ಅಬ್ರಹಾಮನಿಗೂ ಅವನ ಸಂತತಿಯವರಿಗೂ ಜಗತ್ತನ್ನೇ
ಕೊಡುವುದಾಗಿ ದೇವರು ವಾಗ್ದಾನ ಮಾಡಿದನು. ಆದರೆ
ಅಬ್ರಹಾಮನು ಆ ವಾಗ್ದಾನವನ್ನು ಹೊಂದಿಕೊಂಡದ್ದು ಧರ್ಮ
ಶಾಸ್ತ್ರವನ್ನು ಅನುಸರಿಸಿದ್ದರಿಂದಲ್ಲ. ಅಬ್ರಹಾಮನು ನಂಬಿಕೆಯ
ಮೂಲಕ ನೀತಿವಂತನಾದ ಕಾರಣ ಆ ವಾಗ್ದಾನವನ್ನು ಹೊಂದಿ
ಕೊಂಡನು. 14ದೇವರು ವಾಗ್ದಾನ ಮಾಡಿದವುಗಳನ್ನು ಜನರು
ಧರ್ಮಶಾಸ್ತ್ರವನ್ನು ಅನುಸರಿಸುವುದರ ಮೂಲಕ ಹೊಂದಿಕೊಳ್ಳ
ಬಲ್ಲವರಾಗಿದ್ದರೆ, ನಂಬಿಕೆಯು ನಿಷ್ಪ್ರಯೋಜಕವಾಗಿದೆ. ಅಲ್ಲದೆ
ದೇವರು ಅಬ್ರಹಾಮನಿಗೆ ಮಾಡಿದ ವಾಗ್ದಾನವೂ ನಿಷ್ಪ್ರ
ಯೋಜಕವಾಗಿದೆ. 15ಏಕೆಂದರೆ ಧರ್ಮಶಾಸ್ತ್ರಕ್ಕೆ ವಿಧೇಯ
ರಾಗದೆ ಹೋದಾಗ, ಧರ್ಮಶಾಸ್ತ್ರವು ದೇವರ ಕೋಪವನ್ನು
ಮಾತ್ರ ತರುತ್ತದೆ. ಆದರೆ ಧರ್ಮಶಾಸ್ತ್ರವು ಇಲ್ಲದಿದ್ದರೆ
ಅವಿಧೇಯರಾಗುವುದಕ್ಕೆ ಏನೂ ಇರುವುದಿಲ್ಲ.

16ಆದಕಾರಣ ಜನರು ನಂಬಿಕೆಯ ಮೂಲಕವಾಗಿ ದೇವರ
ವಾಗ್ದಾನವನ್ನು ಹೊಂದಿಕೊಳ್ಳುವರು. ವಾಗ್ದಾನವು ಉಚಿತ
ಕೊಡುಗೆಯಾಗಬೇಕೆಂತಲೇ ಹೀಗಾಯಿತು. ವಾಗ್ದಾನವು
ಉಚಿತ ಕೊಡುಗೆಯಾಗಿದ್ದರೆ, ಅಬ್ರಹಾಮನ ಜನರೆಲ್ಲರೂ ಆ
ವಾಗ್ದಾನವನ್ನು ಹೊಂದಿಕೊಳ್ಳುವರು. ಈ ವಾಗ್ದಾನವನ್ನು
ಮೋಶೆಯ ಧರ್ಮಶಾಸ್ತ್ರಕ್ಕೆ ಅಧೀನರಾಗಿ ಜೀವಿಸುವ ಜನರಿಗೆ
ಮಾತ್ರವಲ್ಲ, ಅಬ್ರಹಾಮನಂತೆ ನಂಬಿಕೆಯಲ್ಲಿ ಜೀವಿಸುವ
ಎಲ್ಲರಿಗೂ ಕೊಡಲಾಗಿದೆ. ಅಬ್ರಹಾಮನು ನಮ್ಮೆಲ್ಲರಿಗೂ
ತಂದೆಯಾಗಿದ್ದಾನೆ. 17“ನಾನು ನಿನ್ನನ್ನು ಅನೇಕ ಜನಾಂಗಗಳಿಗೆ
ತಂದೆಯನ್ನಾಗಿ ಮಾಡಿದ್ದೇನೆ”* ಎಂದು ಪವಿತ್ರ ಗ್ರಂಥದಲ್ಲೇ
ಬರೆದಿದೆ. ಇದು ದೇವರ ಸನ್ನಿಧಿಯಲ್ಲಿ ಸತ್ಯವಾಗಿದೆ. ಸತ್ತವರಿಗೆ
ಜೀವವನ್ನು ಕೊಡುವವನೂ ಮತ್ತು ಇನ್ನೂ ಸಂಭವಿಸದಿರುವ
ಸಂಗತಿಗಳು ಸಂಭವಿಸುವಂತೆ ನಿರ್ಧರಿಸುವವನೂ ಆಗಿರುವ
ದೇವರನ್ನು ಅಬ್ರಹಾಮನು ನಂಬಿದನು.

18ಅಬ್ರಹಾಮನಿಗೆ ಮಕ್ಕಳಾಗುವ ಆಸ್ಪದವೇ ಇರಲಿಲ್ಲ.
ಆದರೂ ಅವನು ದೇವರನ್ನು ನಂಬಿ, ತನ್ನ ನಿರೀಕ್ಷೆಯಲ್ಲಿಯೇ
ಮುಂದುವರಿದನು. ಆದಕಾರಣವೇ, ಅವನು ಅನೇಕ ಜನಾಂಗ

---

**ಅಬ್ರಹಾಮನು … ಮಾಡಿತು** ಆದಿಕಾಂಡ 15:6.

**ಸುನ್ನತಿ** ಆದಿಕಾಂಡ 17:9–14.

**ನಾನು … ಮಾಡಿದ್ದೇನೆ** ಆದಿಕಾಂಡ 17:5.

ಗಳಿಗೆ ತಂದೆಯಾದನು. ದೇವರು ಅವನಿಗೆ, ‘‘ನೀನು ಅನೇಕ
ಜನಾಂಗಗಳನ್ನು ಪಡೆಯುವೆ’’* ಎಂದು ಹೇಳಿದ್ದಂತೆಯೇ
ಇದಾಯಿತು. 19ಅಬ್ರಹಾಮನು ಸುಮಾರು ನೂರು
ವರ್ಷದವನಾಗಿದ್ದರಿಂದ ಅವನ ದೇಹವು ದುರ್ಬಲವಾಗಿತ್ತು.
ಆದಕಾರಣ ಅವನು ಮಕ್ಕಳನ್ನು ಪಡೆಯುವ ಸಾಧ್ಯತೆ ಇರಲಿಲ್ಲ.
ಅಲ್ಲದೆ ಸಾರಳಿಗೂ ಮಕ್ಕಳಾಗುವ ಸಾಧ್ಯತೆ ಇರಲಿಲ್ಲ.
ಅಬ್ರಹಾಮನು ಇದರ ಬಗ್ಗೆ ಆಲೋಚಿಸಿದ್ದನು, ಆದರೂ
ದೇವರ ಮೇಲೆ ಅವನಿಗಿದ್ದ ನಂಬಿಕೆಯು ಬಲಹೀನವಾಗಲಿಲ್ಲ.
20ದೇವರು ಮಾಡಿದ ವಾಗ್ದಾನದ ವಿಷಯದಲ್ಲಿ ಅವನು ಸಂಶಯ
ಪಡಲಿಲ್ಲ ಮತ್ತು ತನ್ನ ನಂಬಿಕೆಯನ್ನು ಕೊನೆಗೊಳಿಸಲಿಲ್ಲ.
ಅವನು ತನ್ನ ನಂಬಿಕೆಯಲ್ಲಿ ಬಲವಾಗಿ ಬೆಳೆದನು ಮತ್ತು
ದೇವರಿಗೆ ಸ್ತೋತ್ರ ಸಲ್ಲಿಸಿದನು. 21ದೇವರು ತಾನು ಮಾಡಿದ
ವಾಗ್ದಾನವನ್ನು ಖಂಡಿತವಾಗಿ ನೆರವೇರಿಸಬಲ್ಲನೆಂದು ಅಬ್ರ
ಹಾಮನು ದೃಢವಾಗಿ ನಂಬಿದನು. 22ಆದ್ದರಿಂದ, ‘‘ದೇವರು
ಅಬ್ರಹಾಮನ ನಂಬಿಕೆಯನ್ನು ಸ್ವೀಕರಿಸಿದನು. ಅದು ಅವನನ್ನು
ನೀತಿವಂತನನ್ನಾಗಿ ಮಾಡಿತು.’’* 23ಆ ಮಾತುಗಳು ಬರೆಯ
ಲ್ಪಟ್ಟಿರುವುದು ಅಬ್ರಹಾಮನಿಗೆ ಮಾತ್ರವಲ್ಲ. 24ನಮ
ಗಾಗಿಯೂ ಬರೆಯಲ್ಪಟ್ಟಿವೆ. ನಾವು ನಂಬುವುದರಿಂದ ದೇವರು
ನಮ್ಮನ್ನು ಸಹ ಸ್ವೀಕರಿಸಿಕೊಳ್ಳುವನು. ನಮ್ಮ ಪ್ರಭುವಾದ
ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿ
ದಾತನಲ್ಲಿ (ದೇವರಲ್ಲಿ) ನಾವು ನಂಬಿಕೆ ಇಡುತ್ತೇವೆ. 25ನಮ್ಮ
ಪಾಪಗಳ ದೆಸೆಯಿಂದ ಯೇಸುವನ್ನು ಮರಣಕ್ಕೆ ಒಪ್ಪಿಸ
ಲಾಯಿತು. ನಮ್ಮನ್ನು ನೀತಿವಂತರನ್ನಾಗಿ ಮಾಡುವುದಕ್ಕಾಗಿ
ಆತನನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಲಾಯಿತು.

## ನೀತಿನಿರ್ಣಯ

5 ಹೀಗಿರಲಾಗಿ, ನಾವು ನಂಬಿಕೆಯ ಮೂಲಕ ನೀತಿವಂತ
ರಾಗಿದ್ದೇವೆ. ಆದಕಾರಣ ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಮೂಲಕ ನಮಗೆ ದೇವರೊಂದಿಗೆ ಸಮಾಧಾನವಿದೆ.
2ಈಗ ನಾವು ಆನಂದಿಸುತ್ತಿರುವ ದೇವರ ಕೃಪಾಶ್ರಯಕ್ಕೆ ಕ್ರಿಸ್ತನೇ
ನಮ್ಮನ್ನು ನಮ್ಮ ನಂಬಿಕೆಯ ಮೂಲಕ ತಂದಿದ್ದಾನೆ.

ದೇವರ ಮಹಿಮೆಯನ್ನು ಹೊಂದುವೆವು ಎಂಬ ನಿರೀಕ್ಷೆಯು
ನಮಗಿರುವುದರಿಂದ ನಾವು ಬಹು ಸಂತೋಷವಾಗಿದ್ದೇವೆ.
3ಅಲ್ಲದೆ, ನಮ್ಮ ಕಷ್ಟಸಂಕಟಗಳಲ್ಲಿಯೂ ಸಂತೋಷ
ವಾಗಿದ್ದೇವೆ. ಏಕೆಂದರೆ, ಈ ಕಷ್ಟಸಂಕಟಗಳು ನಮ್ಮಲ್ಲಿ ಹೆಚ್ಚು
ತಾಳ್ಮೆಯನ್ನು ಉಂಟುಮಾಡುತ್ತವೆ. 4ನಾವು ಬಲಶಾಲಿಗಳಾ
ಗಿದ್ದೇವೆ ಎಂಬುದಕ್ಕೆ ಈ ತಾಳ್ಮೆಯೇ ಆಧಾರ. ನಮಗೆ ನಿರೀಕ್ಷೆ
ಯನ್ನು ಕೊಡುವಂಥದ್ದು ಈ ಆಧಾರವೇ. 5ನಮ್ಮ ಈ
ನಿರೀಕ್ಷೆಯು ನಮ್ಮನ್ನು ಎಂದಿಗೂ ನಿರಾಶರನ್ನಾಗಿ ಮಾಡು
ವುದಿಲ್ಲ. ಅದು ಎಂದಿಗೂ ವ್ಯರ್ಥವಾಗುವುದಿಲ್ಲ. ಏಕೆಂದರೆ
ದೇವರು ನಮಗೆ ಉಡುಗೊರೆಯಾಗಿ ಕೊಟ್ಟಿರುವ ಪವಿತ್ರಾತ್ಮನ
ಮೂಲಕ ತನ್ನ ಪ್ರೀತಿಯನ್ನು ಧಾರಾಳವಾಗಿ ಸುರಿಸಿದ್ದಾನೆ.

6ನಾವು ಬಲಹೀನರೂ ದೇವರಿಗೆ ವಿರೋಧವಾಗಿ
ಜೀವಿಸುವವರೂ ಆಗಿದ್ದಾಗಲೇ ಕ್ರಿಸ್ತನು ನಿಯಮಿತ ಕಾಲದಲ್ಲಿ
ನಮಗೋಸ್ಕರ ಪ್ರಾಣಕೊಟ್ಟನು. 7ನೀತಿವಂತನ ಪ್ರಾಣವನ್ನು
ರಕ್ಷಿಸುವುದಕ್ಕಾಗಿ ಒಬ್ಬನು ಪ್ರಾಣಕೊಡುವುದು ಅಪರೂಪ.
ನಿಜವಾಗಿಯೂ ಒಳ್ಳೆಯವನಾಗಿರುವ ಒಬ್ಬನಿಗಾಗಿ ಪ್ರಾಣ
ಕೊಡಲು ಒಬ್ಬನು ಧೈರ್ಯಮಾಡಿದರೂ ಮಾಡಬಹುದು.
8ಆದರೆ ನಾವು ಇನ್ನೂ ಪಾಪಿಗಳಾಗಿದ್ದಾಗಲೇ ಕ್ರಿಸ್ತನು ನಮ
ಗೋಸ್ಕರ ಪ್ರಾಣಕೊಟ್ಟನು. ದೇವರಿಗೆ ನಮ್ಮ ಮೇಲಿರುವ
ಮಹಾಪ್ರೀತಿಯನ್ನು ಇದು ವ್ಯಕ್ತಪಡಿಸಿದೆ.

9ನಾವು ಕ್ರಿಸ್ತನ ರಕ್ತದ ಮೂಲಕವಾಗಿ ನೀತಿವಂತ
ರಾಗಿದ್ದೇವೆ. ಆದ್ದರಿಂದ ಆತನ ಮೂಲಕ ದೇವರ ಕೋಪದಿಂದ
ಖಂಡಿತವಾಗಿ ತಪ್ಪಿಸಿಕೊಳ್ಳುತ್ತೇವೆ. 10ಅಂದರೆ, ನಾವು ದೇವರ
ಶತ್ರುಗಳಾಗಿದ್ದಾಗಲೇ, ದೇವರು ತನ್ನ ಮಗನ ಮರಣದ
ಮೂಲಕವಾಗಿ ನಮ್ಮನ್ನು ತನ್ನ ಸ್ನೇಹಿತರನ್ನಾಗಿ ಮಾಡಿಕೊಂಡಿ
ದ್ದಾನೆ. ಈಗ ನಾವು ದೇವರ ಸ್ನೇಹಿತರಾಗಿರುವುದರಿಂದ ದೇವರು
ತನ್ನ ಮಗನ ಪ್ರಾಣದ ಮೂಲಕ ನಮ್ಮನ್ನು ರಕ್ಷಿಸುವುದು
ಮತ್ತಷ್ಟು ನಿಶ್ಚಯವಾಗಿದೆ. 11ಇಷ್ಟು ಮಾತ್ರವಲ್ಲದೆ, ನಮ್ಮ ಪ್ರಭು
ವಾದ ಯೇಸು ಕ್ರಿಸ್ತನ ಮೂಲಕ ನಾವು ದೇವರಲ್ಲಿ ಹರ್ಷಿಸು
ತ್ತೇವೆ. ಈಗ ನಾವು ದೇವರ ಸ್ನೇಹಿತರಾಗಿರುವುದು ಯೇಸುವಿ
ನಿಂದಲೇ.

## ಆದಾಮ ಮತ್ತು ಕ್ರಿಸ್ತನು

12ಒಬ್ಬ ಮನುಷ್ಯನು (ಆದಾಮ) ಮಾಡಿದ ಕೃತ್ಯದಿಂದ
ಪಾಪವು ಲೋಕಕ್ಕೆ ಬಂದಿತು. ಆ ಪಾಪದೊಂದಿಗೆ ಮರಣವೂ
ಬಂದಿತು. ಆದಕಾರಣವೇ ಎಲ್ಲಾ ಜನರು ಸಾಯಲೇಬೇಕು;
ಏಕೆಂದರೆ ಎಲ್ಲಾ ಜನರು ಪಾಪ ಮಾಡಿದ್ದಾರೆ. 13ಮೋಶೆಯ
ಧರ್ಮಶಾಸ್ತ್ರಕ್ಕಿಂತ ಮೊದಲೇ ಪಾಪವು ಲೋಕದಲ್ಲಿತ್ತು.
ಧರ್ಮಶಾಸ್ತ್ರವು ಇಲ್ಲದಿದ್ದರೆ, ದೇವರು ಜನರ ಪಾಪವನ್ನು
ಪರಿಗಣಿಸುವುದಿಲ್ಲ. 14ಆದರೆ ಆದಾಮನ ಕಾಲದಿಂದ
ಮೋಶೆಯ ಕಾಲದವರೆಗೆ ಎಲ್ಲಾ ಜನರು ಸಾಯಲೇಬೇಕಾ
ಯಿತು. ಆದಾಮನು ಪಾಪ ಮಾಡಿದ್ದರಿಂದ ಸತ್ತನು. ದೇವರ
ಆಜ್ಞೆಗೆ ಅವಿಧೇಯನಾದದ್ದೇ ಆ ಪಾಪ. ಆದರೆ ಆದಾಮನು
ಮಾಡಿದ ಪಾಪಕ್ಕೆ ಸರಿಸಮಾನವಾದ ಪಾಪವನ್ನು ಮಾಡಿಲ್ಲ
ದವರು ಸಹ ಸಾಯಬೇಕಾಯಿತು. ಆದಾಮನು ಮುಂದಿನ ಕಾಲ
ದಲ್ಲಿ ಬರಲಿದ್ದ ಒಬ್ಬಾತನಿಗೆ (ಕ್ರಿಸ್ತನಿಗೆ) ಮುನ್ಸೂಚನೆಯಾಗಿ
ದ್ದನು. 15ಆದರೆ ದೇವರ ಉಚಿತ ಕೊಡುಗೆಯು ಆದಾಮನ
ಪಾಪದಂತಿಲ್ಲ. ಆ ಒಬ್ಬನು ಮಾಡಿದ ಪಾಪದ ದೆಸೆಯಿಂದಾಗಿ
ಅನೇಕ ಜನರು ಸತ್ತರು. ಆದರೆ ಜನರು ದೇವರಿಂದ ಪಡೆದು
ಕೊಂಡ ಕೃಪೆಯು ಅದಕ್ಕಿಂತ ಬಹು ದೊಡ್ಡದಾಗಿದೆ. ಯೇಸು
ಕ್ರಿಸ್ತನೆಂಬ ಒಬ್ಬ ಪುರುಷನ ಕೃಪೆಯ ಮೂಲಕ ದೇವರು
ಉಚಿತವಾಗಿ ಕೊಡುವ ‘ಜೀವ’ವನ್ನು ಅನೇಕ ಜನರು ಹೊಂದಿ
ಕೊಂಡರು. 16ಆದಾಮನು ಒಮ್ಮೆ ಪಾಪಮಾಡಿದ ಮೇಲೆ
ಅವನಿಗೆ ಅಪರಾಧಿ ಎಂದು ತೀರ್ಪು ನೀಡಲಾಯಿತು. ಆದರೆ
ದೇವರ ಉಚಿತವಾದ ಕೊಡುಗೆ ಅದಕ್ಕೆ ತದ್ವಿರುದ್ಧವಾಗಿದೆ.
ಅನೇಕ ಪಾಪಗಳ ದೆಸೆಯಿಂದ ದೇವರ ಉಚಿತವಾದ ಕೊಡುಗೆ
ಬಂದಿತು. ಆ ಉಚಿತ ಕೊಡುಗೆ ಜನರನ್ನು ನೀತಿವಂತರನ್ನಾಗಿ
ಮಾಡುತ್ತದೆ. 17ಒಬ್ಬನು ಪಾಪ ಮಾಡಿದನು, ಆ ಒಬ್ಬನ
ದೆಸೆಯಿಂದ ಮರಣವು ಎಲ್ಲಾ ಜನರ ಮೇಲೆ ಆಳ್ವಿಕೆ ನಡೆಸಿತು.
ಆದರೆ ಈಗ ಕೆಲವು ಜನರು ದೇವರ ಪೂರ್ಣ ಕೃಪೆಯನ್ನು ಮತ್ತು
ನೀತಿವಂತರನ್ನಾಗಿ ಮಾಡುವ ಆತನ ಉಚಿತವಾದ ಮಹಾ

---

**ನೀನು … ಪಡೆಯುವೆ** ಆದಿಕಾಂಡ 15:5.

**ದೇವರು … ಮಾಡಿತು** ಆದಿಕಾಂಡ 15:6.

ಕೊಡುಗೆಯನ್ನು ಸ್ವೀಕರಿಸಿಕೊಳ್ಳುವರು. ನಿಶ್ಚಯವಾಗಿಯು
ಅವರು ಯೇಸು ಕ್ರಿಸ್ತನೆಂಬ ಆ ಒಬ್ಬ ಪುರುಷನ ಮೂಲಕ,
ನಿಜವಾದ ಜೀವವನ್ನು ಹೊಂದಿಕೊಳ್ಳುವರು ಮತ್ತು ಆಳುವರು.

18ಹೀಗಿರಲಾಗಿ, ಆದಾಮನ ಒಂದು ಪಾಪವು ಎಲ್ಲಾ
ಜನರಿಗೆ ಮರಣದಂಡನೆಯನ್ನು ತಂದಿತು. ಆದರೆ ಅದೇ
ರೀತಿಯಲ್ಲಿ, ಕ್ರಿಸ್ತನು ಮಾಡಿದ ಒಂದೇ ಒಳ್ಳೆಯ ಕಾರ್ಯವು,
ಎಲ್ಲಾ ಜನರನ್ನು ನೀತಿವಂತರನ್ನಾಗಿ ಮಾಡುತ್ತದೆ. ಮತ್ತು ಆ
ಜನರಿಗೆ ಅದು ನಿಜವಾದ ಜೀವನವನ್ನು ತರುತ್ತದೆ. 19ಒಬ್ಬನು
ದೇವರಿಗೆ ಅವಿಧೇಯನಾದ್ದರಿಂದ ಎಲ್ಲಾ ಜನರು ಪಾಪಿಗಳಾ
ದರು. ಆದರೆ ಅದೇ ರೀತಿಯಲ್ಲಿ, ಒಬ್ಬನು ದೇವರಿಗೆ ವಿಧೇಯ
ನಾದ್ದರಿಂದ ಎಲ್ಲರೂ ನೀತಿವಂತರಾಗುವರು. 20ಧರ್ಮಶಾಸ್ತ್ರ
ಬಂದದ್ದರಿಂದ ಜನರಲ್ಲಿ ಹೆಚ್ಚು ಪಾಪಗಳು ಕಂಡುಬಂದವು.
ಆದರೆ ಜನರು ಹೆಚ್ಚು ಪಾಪಗಳನ್ನು ಮಾಡಿದಾಗ, ದೇವರು
ಅವರಿಗೆ ಹೆಚ್ಚು ಕೃಪೆಯನ್ನು ದಯಪಾಲಿಸಿದನು. 21ಒಂದು
ಕಾಲದಲ್ಲಿ ಪಾಪವು ಮರಣದ ಮೂಲಕ ನಮ್ಮ ಮೇಲೆ ಆಳ್ವಿಕೆ
ನಡೆಸಿತು. ಆದರೆ ದೇವರು ಜನರನ್ನು ನೀತಿವಂತರನ್ನಾಗಿ
ಮಾಡಬೇಕೆಂದು ತನ್ನ ಕೃಪೆಯನ್ನು ಹೆಚ್ಚಾಗಿ ಅನುಗ್ರಹಿಸಿದನು.
ಈ ಕೃಪೆಯು ನಮ್ಮ ಪ್ರಭುವಾದ ಯೇಸು ಕ್ರಿಸ್ತನ ಮೂಲಕ
ನಮಗೆ ನಿತ್ಯಜೀವವನ್ನು ತರುತ್ತದೆ.

### ಪಾಪದ ಪಾಲಿಗೆ ಸತ್ತವರು, ಆದರೆ ಕ್ರಿಸ್ತನಲ್ಲಿ ಜೀವಂತರು

6 ಹಾಗಾದರೆ ನಿಮ್ಮ ಅಭಿಪ್ರಾಯವೇನು? ದೇವರು ನಮಗೆ
ಹೆಚ್ಚು ಹೆಚ್ಚು ಕೃಪೆಯನ್ನು ತೋರಿಸಲೆಂದು ನಾವು
ಪಾಪದಲ್ಲೇ ಮುಂದುವರಿಯಬೇಕೇ? 2ಇಲ್ಲ! ನಾವು ನಮ್ಮ
ಹಿಂದಿನ ಪಾಪಮಯ ಜೀವಿತಗಳ ಪಾಲಿಗೆ ಸತ್ತುಹೋದೆವು.
ಹೀಗಿರಲು, ನಾವು ಪಾಪದಲ್ಲೇ ಜೀವಿಸಲು ಹೇಗೆ ಸಾಧ್ಯ?
3ನಾವು ದೀಕ್ಷಾಸ್ನಾನ ಮಾಡಿಸಿಕೊಂಡಾಗ ಕ್ರಿಸ್ತನಲ್ಲಿ ಪಾಲುಗಾರ
ರಾದೆವು ಎಂಬುದನ್ನು ನೀವು ಮರೆತುಬಿಟ್ಟಿರಾ? ನಮ್ಮ ದೀಕ್ಷಾ
ಸ್ನಾನದ ಮೂಲಕ ನಾವು ಆತನ ಮರಣದಲ್ಲಿ ಪಾಲುಗಾರ
ರಾದೆವು. 4ಹೀಗಿರಲಾಗಿ, ನಾವು ದೀಕ್ಷಾಸ್ನಾನ ಮಾಡಿಸಿ
ಕೊಂಡಾಗ, ನಮಗೆ ಕ್ರಿಸ್ತನೊಂದಿಗೆ ಸಮಾಧಿಯಾಯಿತು ಮತ್ತು
ನಾವು ಆತನ ಮರಣದಲ್ಲಿ ಪಾಲುಗಾರರಾದೆವು. ನಾವು ಜೀವಂತ
ವಾಗಿ ಎದ್ದು ಹೊಸ ಜೀವಿತವನ್ನು ನಡೆಸಬೇಕೆಂದು ನಮಗೆ ಕ್ರಿಸ್ತ
ನೊಂದಿಗೆ ಸಮಾಧಿಯಾಯಿತು. ಕ್ರಿಸ್ತನು ತಂದೆಯ ಅದ್ಭುತ
ವಾದ ಶಕ್ತಿಯ ಮೂಲಕ ಸತ್ತವರೊಳಗಿಂದ ಜೀವಂತವಾಗಿ ಎದ್ದು
ಬಂದಂತೆಯೇ ನಾವು ಜೀವಂತವಾಗಿ ಎದ್ದುಬಂದೆವು.

5ಕ್ರಿಸ್ತನ ಮರಣಕ್ಕೆ ಸದೃಶ್ಯವಾದ ಮರಣದ ಮೂಲಕ ನಾವು
ಸಹ ಆತನೊಂದಿಗೆ ಐಕ್ಯರಾದೆವು. ಆದ್ದರಿಂದ ಕ್ರಿಸ್ತನು ಸತ್ತವ
ರೊಳಗಿಂದ ಜೀವಂತವಾಗಿ ಎದ್ದು ಬಂದಂತೆಯೇ ನಾವು ಸಹ
ಜೀವಂತವಾಗಿ ಎದ್ದುಬರುವುದರ ಮೂಲಕವಾಗಿ ಆತನೊಂದಿಗೆ
ಐಕ್ಯರಾಗುವೆವು. 6ನಮ್ಮ ಹಳೆಯ ಜೀವಿತವು ಕ್ರಿಸ್ತನೊಂದಿಗೆ
ಶಿಲುಬೆಯ ಮೇಲೆ ಸತ್ತುಹೋಯಿತೆಂಬುದು ನಮಗೆ ಗೊತ್ತಿದೆ.
ನಮ್ಮ ಪಾಪಸ್ವಭಾವಕ್ಕೆ ನಮ್ಮ ಮೇಲೆ ಯಾವ ಅಧಿಕಾರ ಇರಬಾರ
ದೆಂತಲೂ ನಾವು ಪಾಪಕ್ಕೆ ಗುಲಾಮರಾಗಿರಬಾರದೆಂತಲೂ
ಹೀಗಾಯಿತು. 7ಪಾಪದ ಪಾಲಿಗೆ ಸತ್ತವನು ಪಾಪದ ಹಿಡಿತದಿಂದ
ಬಿಡುಗಡೆ ಹೊಂದಿದ್ದಾನೆ. 8ನಾವು ಕ್ರಿಸ್ತನೊಂದಿಗೆ ಸತ್ತಿದ್ದರೆ,
ಆತನೊಂದಿಗೆ ಜೀವಿಸುತ್ತೇವೆ ಎಂಬುದೂ ನಿಶ್ಚಯವಾಗಿದೆ.
9ಕ್ರಿಸ್ತನು ಸತ್ತವರೊಳಗಿಂದ ಜೀವಂತವಾಗಿ ಎದ್ದುಬಂದನು.
ಆತನು ಮತ್ತೆ ಸಾಯಲು ಸಾಧ್ಯವಿಲ್ಲವೆಂಬುದು ನಮಗೆ ತಿಳಿದದೆ.
ಈಗ ಮರಣಕ್ಕೆ ಆತನ ಮೇಲೆ ಯಾವ ಅಧಿಕಾರವೂ ಇಲ್ಲ.
10ಹೌದು, ಕ್ರಿಸ್ತನು ಪಾಪದ ಶಕ್ತಿಯನ್ನು ಸೋಲಿಸುವುದಕ್ಕಾಗಿ
ಒಂದೇ ಸಲ ಸತ್ತನು; ಅದು ಎಲ್ಲಾ ಕಾಲಕ್ಕೂ ಸಾಕಾಗಿದೆ. ಈಗ
ಆತನಲ್ಲಿ ಹೊಸ ಜೀವಿತವಿದೆ. ದೇವರೊಂದಿಗೆ ಜೀವಿಸುವುದೇ
ಆ ಹೊಸ ಜೀವಿತ. 11ಅದೇ ರೀತಿಯಲ್ಲಿ ನೀವು ಸಹ ನಿಮ್ಮನ್ನು
ಪಾಪದ ಶಕ್ತಿಯ ಪಾಲಿಗೆ ಸತ್ತವರೆಂದು ಮತ್ತು ಕ್ರಿಸ್ತ ಯೇಸುವಿನ
ಮೂಲಕ ದೇವರಿಗಾಗಿ ಜೀವಿಸುವವರೆಂದು ಪರಿಗಣಿಸಿರಿ.

12ಆದರೆ ನೀವು ಭೂಲೋಕದ ಜೀವನದಲ್ಲಿ ಪಾಪಕ್ಕೆ
ಅಧೀನರಾಗಿರಬೇಡಿ; ನಿಮ್ಮ ಪಾಪಾಧೀನ ಸ್ವಭಾವದ ದುರಾಶೆ
ಗಳ ಆಡಳಿತಕ್ಕೆ ಒಳಗಾಗಬೇಡಿ. 13ನಿಮ್ಮ ದೇಹದ ಅಂಗಗಳನ್ನು
ಪಾಪದ ಸೇವೆಗೆ ಒಪ್ಪಿಸಬೇಡಿ; ನಿಮ್ಮ ದೇಹಗಳನ್ನು ಪಾಪಕ್ಕೆ
ಒಪ್ಪಿಸಿ ದುಷ್ಟತ್ವವನ್ನು ನಡೆಸುವ ಸಾಧನಗಳಾಗಬೇಡಿ. ಅದಕ್ಕೆ
ಬದಲಾಗಿ, ನಿಮ್ಮನ್ನೇ ದೇವರಿಗೆ ಸಮರ್ಪಿಸಿಕೊಳ್ಳಿರಿ; ಸತ್ತು ಈಗ
ಜೀವಂತವಾಗಿ ಎದ್ದುಬಂದಿರುವವರಂತೆ ಜೀವಿಸಿರಿ; ಒಳ್ಳೆಯ
ಕಾರ್ಯಗಳನ್ನು ಮಾಡುವ ಸಾಧನಗಳನ್ನಾಗಿ ನಿಮ್ಮ ದೇಹದ
ಅಂಗಗಳನ್ನು ದೇವರಿಗೆ ಸಮರ್ಪಿಸಿರಿ. 14ಪಾಪವು ನಿಮ್ಮ ಒಡೆಯ
ನಾಗಿರುವುದಿಲ್ಲ. ಏಕೆಂದರೆ, ನೀವು ಧರ್ಮಶಾಸ್ತ್ರಕ್ಕೆ ಅಧೀನ
ರಲ್ಲ. ಈಗ ನೀವು ದೇವರ ಕೃಪೆಯಲ್ಲಿ ಜೀವಿಸುವವರಾಗಿದ್ದೀರಿ.

### ನೀತಿಯ ಗುಲಾಮರು

15ಹೀಗಿರಲಾಗಿ ನಾವೇನು ಮಾಡಬೇಕು? ನಾವು
ಧರ್ಮಶಾಸ್ತ್ರದ ಅಧೀನದಲ್ಲಿರದೆ ಕೃಪೆಯ ಅಧೀನದಲ್ಲಿರುವು
ದರಿಂದ ಪಾಪ ಮಾಡಬೇಕೇ? ಇಲ್ಲ! 16ನೀವು ಯಾವನಿಗೆ
ಗುಲಾಮರಂತೆ ವಿಧೇಯರಾಗುತ್ತೀವೆ ಎಂದು ನಿಮ್ಮನ್ನು ಒಪ್ಪಿಸಿ
ಕೊಡುತ್ತೀರೋ ಆ ವ್ಯಕ್ತಿಗೆ ನೀವು ನಿಜವಾಗಿಯೂ ಗುಲಾಮ
ರಾಗಿದ್ದೀರಿ ಎಂಬುದು ನಿಮಗೆ ಖಂಡಿತವಾಗಿ ತಿಳಿದಿದೆ. ನೀವು
ಯಾವನಿಗೆ ವಿಧೇಯರಾಗುತ್ತೀರೋ ಅವನೇ ನಿಮ್ಮ ಒಡೆಯ
ನಾಗಿದ್ದಾನೆ. ನೀವು ಪಾಪವನ್ನಾದರೂ ಅನುಸರಿಸಬಹುದು
ಅಥವಾ ದೇವರಿಗಾದರೂ ವಿಧೇಯರಾಗಬಹುದು. ಪಾಪವು
ಆತ್ಮಿಕ ಮರಣವನ್ನು ಉಂಟುಮಾಡುತ್ತದೆ. ಆದರೆ ನೀವು
ದೇವರಿಗೆ ವಿಧೇಯರಾದರೆ, ಆ ವಿಧೇಯತೆಯು ನಿಮ್ಮನ್ನು
ನೀತಿವಂತರನ್ನಾಗಿ ಮಾಡುತ್ತದೆ. 17ಹಿಂದಿನ ಕಾಲದಲ್ಲಿ ನೀವು
ಪಾಪಕ್ಕೆ ಗುಲಾಮರಾಗಿದ್ದಿರಿ. ಪಾಪವು ನಿಮ್ಮನ್ನು ತನ್ನ ಹಿಡಿತ
ದಲ್ಲಿಟ್ಟುಕೊಂಡಿತ್ತು. ನಿಮಗೆ ಬೋಧಿಸಿದ ವಿಷಯಗಳಿಗೆ ನೀವು
ಸಂಪೂರ್ಣವಾಗಿ ವಿಧೇಯರಾದ್ದರಿಂದ ದೇವರಿಗೆ ಸ್ತೋತ್ರ
ವಾಗಲಿ.

18ನೀವು ಪಾಪದಿಂದ ಬಿಡುಗಡೆ ಹೊಂದಿದ್ದೀರಿ. ಈಗ
ನೀವು ನೀತಿಗೆ ಗುಲಾಮರಾಗಿದ್ದೀರಿ. 19ಜನರಿಗೆ ತಿಳಿದಿರುವ
ಉದಾಹರಣೆಯ ಮೂಲಕ ನಾನು ಇದನ್ನು ನಿಮಗೆ ವಿವರಿಸು
ತ್ತೇನೆ. ಹಿಂದಿನ ಕಾಲದಲ್ಲಿ ನೀವು ನಿಮ್ಮ ದೇಹದ ಅಂಗಗಳನ್ನು
ಪಾಪಕ್ಕೂ ದುಷ್ಟತ್ವಕ್ಕೂ ಗುಲಾಮರನ್ನಾಗಿ ಒಪ್ಪಿಸಿಕೊಟ್ಟಿದ್ದಿರಿ.
ನೀವು ದುಷ್ಟತ್ವಕ್ಕಾಗಿ ಮಾತ್ರ ಜೀವಿಸಿದಿರಿ. ಅದೇ ರೀತಿಯಲ್ಲಿ
ಈಗ ನೀವು ನಿಮ್ಮ ದೇಹದ ಅಂಗಗಳನ್ನು ನೀತಿಗೆ ಗುಲಾಮ
ರನ್ನಾಗಿ ಒಪ್ಪಿಸಿಕೊಡಬೇಕು. ಆಗ ನೀವು ದೇವರಿಗಾಗಿ ಮಾತ್ರ
ಜೀವಿಸುತ್ತೀರಿ.

[20]ಹಿಂದಿನ ಕಾಲದಲ್ಲಿ ನೀವು ಪಾಪಕ್ಕೆ ಗುಲಾಮರಾಗಿದ್ದಿರಿ
ಮತ್ತು ನೀತಿಯ ಹತೋಟಿಗೆ ಒಳಗಾಗಿರಲಿಲ್ಲ. [21]ನೀವು ದುಷ್ಟ
ಕಾರ್ಯಗಳನ್ನು ಮಾಡಿದಿರಿ. ಈಗ ನೀವು ಆ ಕಾರ್ಯಗಳ
ವಿಷಯದಲ್ಲಿ ನಾಚಿಕೆಪಡುತ್ತೀರಿ. ಆ ಕಾರ್ಯಗಳು ನಿಮಗೆ
ಸಹಾಯ ಮಾಡಿದವೇ? ಇಲ್ಲ. ಆ ಕಾರ್ಯಗಳು ಆತ್ಮಿಕ ಮರಣ
ವನ್ನು ಮಾತ್ರ ಉಂಟುಮಾಡುತ್ತವೆ. [22]ಆದರೆ ಈಗ ನೀವು
ಪಾಪದಿಂದ ಬಿಡುಗಡೆಯಾಗಿ ದೇವರ ಗುಲಾಮರಾಗಿದ್ದೀರಿ.
ಇದರಿಂದ ನಿಮಗೆ ಪರಿಶುದ್ಧ ಜೀವನವೂ ನಿತ್ಯಜೀವವೂ
ದೊರೆಯುತ್ತವೆ. [23]ಜನರು ಮಾಡುವ ಪಾಪಕ್ಕೆ ಮರಣವೇ
ಸಂಬಳ. ಆದರೆ ದೇವರ ಉಚಿತವಾದ ಕೊಡುಗೆಯು ನಮ್ಮ
ಪ್ರಭುವಾದ ಕ್ರಿಸ್ತ ಯೇಸುವಿನಲ್ಲಿರುವ ನಿತ್ಯಜೀವ.

### ನೀತಿವಂತರಿಗೆ ಧರ್ಮಶಾಸ್ತ್ರದ ಹಂಗಿಲ್ಲ

7 ಸಹೋದರ ಸಹೋದರಿಯರೇ, ನೀವೆಲ್ಲರು ಮೋಶೆಯ
ಧರ್ಮಶಾಸ್ತ್ರವನ್ನು ಅರ್ಥಮಾಡಿಕೊಳ್ಳುತ್ತೀರಿ. ಒಬ್ಬ
ವ್ಯಕ್ತಿಯು ಜೀವದಿಂದಿರುವವರೆಗೆ ಮಾತ್ರ ಧರ್ಮಶಾಸ್ತ್ರವು ಆ
ವ್ಯಕ್ತಿಯನ್ನು ಆಳುತ್ತದೆ ಎಂಬುದು ನಿಮಗೆ ತಿಳಿದಿಲ್ಲವೇ? [2]ನಾನು
ನಿಮಗೆ ಒಂದು ಉದಾಹರಣೆಯನ್ನು ಕೊಡುತ್ತೇನೆ: ಗಂಡನು
ಬದುಕಿರುವ ತನಕ ಹೆಂಡತಿಯು ಕಾನೂನಿನ ಪ್ರಕಾರ ಅವನಿಗೆ
ಬದ್ಧಳಾಗಿರಬೇಕು. ಆದರೆ ಆಕೆಯ ಗಂಡನು ತೀರಿಕೊಂಡರೆ,
ವಿವಾಹದ ಕಾನೂನಿನಿಂದ ಆಕೆಯು ಬಿಡುಗಡೆಯಾಗಿದ್ದಾಳೆ.
[3]ಆದರೆ ತನ್ನ ಗಂಡನು ಜೀವದಿಂದಿರುವಾಗಲೇ ಮತ್ತೊಬ್ಬನನ್ನು
ಮದುವೆ ಮಾಡಿಕೊಂಡರೆ ಆಕೆಯು ವ್ಯಭಿಚಾರವೆಂಬ ಅಪ
ರಾಧಕ್ಕೆ ಗುರಿಯಾಗುತ್ತಾಳೆಂದು ಧರ್ಮಶಾಸ್ತ್ರವು ಹೇಳುತ್ತದೆ.
ಆದರೆ ಆಕೆಯ ಗಂಡನು ಸತ್ತುಹೋದರೆ ಆಕೆಯು ವಿವಾಹದ
ಹಂಗಿನಿಂದ ಬಿಡುಗಡೆಯಾಗಿದ್ದಾಳೆ. ಹೀಗಿರಲಾಗಿ, ತನ್ನ
ಗಂಡನು ತೀರಿಕೊಂಡ ಮೇಲೆ ಮತ್ತೊಬ್ಬನನ್ನು ಮದುವೆ
ಮಾಡಿಕೊಂಡರೆ ಆಕೆಯು ವ್ಯಭಿಚಾರವೆಂಬ ಅಪರಾಧಕ್ಕೆ
ಗುರಿಯಾಗುವುದಿಲ್ಲ.

[4]ನನ್ನ ಸಹೋದರ ಸಹೋದರಿಯರೇ, ಇದೇ ರೀತಿಯಲ್ಲಿ
ನಿಮ್ಮ ಹಳೇ ಸ್ವಭಾವವು ಸತ್ತುಹೋಯಿತು; ನೀವು ಕ್ರಿಸ್ತನ
ದೇಹದ ಮೂಲಕ ಧರ್ಮಶಾಸ್ತ್ರದಿಂದ ಬಿಡುಗಡೆಯಾದಿರಿ.
ಈಗ ನೀವು, ಸತ್ತವರೊಳಗಿಂದ ಜೀವಂತವಾಗಿ ಎದ್ದುಬಂದಾ
ತನಿಗೆ ಸೇರಿದವರಾಗಿದ್ದೀರಿ. ನಾವು ದೇವರಿಗೋಸ್ಕರ ಫಲವನ್ನು
ಫಲಿಸುವುದಕ್ಕಾಗಿ ಕ್ರಿಸ್ತನಿಗೆ ಸೇರಿದವರಾಗಿದ್ದೇವೆ. [5]ಹಿಂದಿನ
ಕಾಲದಲ್ಲಿ, ನಮ್ಮ ಪಾಪಾಧೀನ ಸ್ವಭಾವವು ನಮ್ಮನ್ನು ಆಳುತ್ತಿತ್ತು.
ಪಾಪಕಾರ್ಯಗಳನ್ನು ಮಾಡಬೇಕೆಂಬ ಬಯಕೆಯನ್ನು ಧರ್ಮ
ಶಾಸ್ತ್ರವು ನಮ್ಮಲ್ಲಿ ಉಂಟುಮಾಡಿತು. ಮತ್ತು ನಾವು ಮಾಡ
ಲಿಚ್ಛಿಸಿದ್ದ ಆ ಪಾಪಕಾರ್ಯಗಳು ನಮ್ಮ ದೇಹಗಳನ್ನು ತಮ್ಮ
ಹತೋಟಿಯಲ್ಲಿಟ್ಟುಕೊಂಡವು. ಇದರಿಂದಾಗಿ, ನಾವು ಮಾಡಿದ
ಕಾರ್ಯಗಳೆಲ್ಲ ನಮಗೆ ಆತ್ಮಿಕ ಮರಣವನ್ನು ಮಾತ್ರ ಉಂಟು
ಮಾಡುತ್ತಿದ್ದವು. [6]ಹಿಂದಿನ ಕಾಲದಲ್ಲಿ, ಧರ್ಮಶಾಸ್ತ್ರವು ನಮ್ಮನ್ನು
ಸೆರೆಯಾಳುಗಳಂತೆ ಬಂಧಿಸಿತ್ತು. ಆದರೆ ನಮ್ಮ ಹಳೆಯ
ಸ್ವಭಾವವು ಸತ್ತುಹೋದಕಾರಣ ನಾವು ಧರ್ಮಶಾಸ್ತ್ರದಿಂದ
ಬಿಡುಗಡೆಯಾದೆವು. ಆದ್ದರಿಂದ ಈಗ ನಾವು ಲಿಖಿತ ನಿಯಮ
ಗಳೊಡನೆ ಹಳೇ ರೀತಿಯಲ್ಲಿ ದೇವರ ಸೇವೆ ಮಾಡದೆ ಪವಿತ್ರಾತ್ಮ
ಪ್ರೇರಿತವಾದ ಹೊಸ ರೀತಿಯಲ್ಲಿ ದೇವರ ಸೇವೆ ಮಾಡುತ್ತೇವೆ.

### ಪಾಪದೊಡನೆ ಹೋರಾಟ

[7]ಪಾಪ ಮತ್ತು ಧರ್ಮಶಾಸ್ತ್ರ ಇವೆರಡೂ ಒಂದೇ ಎಂದು
ನಾನು ಹೇಳುತ್ತಿರುವುದಾಗಿ ನೀವು ಭಾವಿಸಬಹುದು. ಆದರೆ
ಅದು ನಿಜವಲ್ಲ. ಪಾಪವೆಂದರೆ ಏನೆಂಬುದನ್ನು ಕಲಿತುಕೊಳ್ಳಲು
ಧರ್ಮಶಾಸ್ತ್ರವೊಂದೇ ನನಗೆ ಏಕೈಕ ಮಾರ್ಗವಾಗಿದೆ. ಧರ್ಮ
ಶಾಸ್ತ್ರವಿಲ್ಲದಿದ್ದರೆ, ದುರಾಶೆ ಎಂದರೆ ಏನೆಂಬುದೇ ನನಗೆ
ತಿಳಿಯುತ್ತಿರಲಿಲ್ಲ. ‘‘ಬೇರೆಯವರ ವಸ್ತುಗಳನ್ನು ನೀವು ಆಶಿಸ
ಕೂಡದು’’ * ಎಂದು ಧರ್ಮಶಾಸ್ತ್ರವು ಹೇಳಿದ್ದರಿಂದಲೇ ಅದು
ನನಗೆ ತಿಳಿಯಿತು. [8]ಆದರೆ ಪಾಪವು ಆ ಆಜ್ಞೆಯನ್ನೇ ಬಳಸಿ
ಕೊಂಡು ನನ್ನಲ್ಲಿ ಎಲ್ಲಾ ಬಗೆಯ ದುರಾಶೆಗಳನ್ನು ಕೆರಳಿಸಿತು.
ಆದ್ದರಿಂದ ಆ ಆಜ್ಞೆಯಿಂದಾಗಿ ಪಾಪವು ನನ್ನ ಬಳಿಗೆ ಬಂದಿತು.
ಆದರೆ ಧರ್ಮಶಾಸ್ತ್ರವಿಲ್ಲದಿದ್ದರೆ, ಪಾಪಕ್ಕೆ ಅಧಿಕಾರವೇ ಇಲ್ಲ.
[9]ನಾನು ಧರ್ಮಶಾಸ್ತ್ರವನ್ನು ತಿಳಿದುಕೊಳ್ಳುವುದಕ್ಕಿಂತ ಮೊದಲು
ಧರ್ಮಶಾಸ್ತ್ರವಿಲ್ಲದವನಾಗಿ ಜೀವಂತವಾಗಿದ್ದೆನು. ಆದರೆ
ಧರ್ಮಶಾಸ್ತ್ರದ ಆಜ್ಞೆಯು ನನ್ನ ಬಳಿಗೆ ಬಂದಾಗ, ಪಾಪವು
ಜೀವಿಸತೊಡಗಿತು. [10]ನಾನು ಪಾಪದ ನಿಮಿತ್ತ ಆತ್ಮಿಕವಾಗಿ ಸತ್ತು
ಹೋದೆನು. ಜೀವವನ್ನು ತರಬೇಕಾಗಿದ್ದ ಆಜ್ಞೆಯೇ ನನಗೆ
ಮರಣವನ್ನು ತಂದಿತು. [11]ಪಾಪವು ಆ ಆಜ್ಞೆಯನ್ನು ಬಳಸಿ
ಕೊಂಡು ನನ್ನನ್ನು ವಂಚಿಸಿ, ನನ್ನಲ್ಲಿ ಆತ್ಮಿಕ ಮರಣವನ್ನು
ಉಂಟುಮಾಡಿತು.

[12]ಹೀಗಿರಲು ಧರ್ಮಶಾಸ್ತ್ರ ಪರಿಶುದ್ಧವಾದದ್ದು. ಆಜ್ಞೆಯು
ಪರಿಶುದ್ಧವೂ ನ್ಯಾಯವೂ ಒಳ್ಳೆಯದೂ ಆಗಿದೆ. [13]ಹಾಗಾದರೆ,
ಒಳ್ಳೆಯದೇ ನನಗೆ ಮರಣವನ್ನು ಬರಮಾಡಿತೆಂದರ್ಥವೇ?
ಇಲ್ಲ! ಆದರೆ ಪಾಪವು ಒಳ್ಳೆಯದನ್ನೇ ಬಳಸಿಕೊಂಡು ನನಗೆ
ಮರಣವನ್ನು ಬರಮಾಡಿತು. ಇದರಿಂದಾಗಿ, ನಾನು ಪಾಪದ ನಿಜ
ಸ್ವರೂಪವನ್ನು ಕಾಣುವಂತಾಯಿತು. ಪಾಪವು ಬಹು ಕೆಟ್ಟದ್ದೆಂದು
ಆಜ್ಞೆಯ ಮೂಲಕ ಸ್ಪಷ್ಟವಾಯಿತು.

### ಮನುಷ್ಯನಲ್ಲಿ ಹೋರಾಟ

[14]ಧರ್ಮಶಾಸ್ತ್ರವು ಆತ್ಮಿಕವಾದದ್ದೆಂದು ನಾವು ಬಲ್ಲೆವು.
ಆದರೆ ನಾನು ಆತ್ಮಿಕನಲ್ಲ. ನಾನು ಪಾಪಕ್ಕೆ ಮಾರಲ್ಪಟ್ಟ
ಗುಲಾಮನೋ ಎಂಬಂತೆ ಪಾಪವು ನನ್ನನ್ನು ಆಳುತ್ತದೆ. [15]ನಾನು
ಮಾಡುವ ಕಾರ್ಯಗಳು ನನಗೇ ಅರ್ಥವಾಗುವುದಿಲ್ಲ. ನಾನು
ಯಾವ ಒಳ್ಳೆಯ ಕಾರ್ಯಗಳನ್ನು ಮಾಡಬೇಕೆಂದು ಇಚ್ಛಿಸು
ತ್ತೇನೋ ಆ ಕಾರ್ಯಗಳನ್ನು ಮಾಡದೆ ನಾನು ದ್ವೇಷಿಸುವ ಕೆಟ್ಟ
ಕಾರ್ಯಗಳನ್ನೇ ಮಾಡುತ್ತೇನೆ. [16]ನಾನು ಮಾಡುವ ಕೆಟ್ಟ
ಕಾರ್ಯಗಳನ್ನು ಮಾಡಲು ನನಗೆ ಇಷ್ಟವಿಲ್ಲದಿದ್ದರೆ, ಧರ್ಮ
ಶಾಸ್ತ್ರವು ಒಳ್ಳೆಯದೆಂದು ನಾನು ಒಪ್ಪಿಕೊಂಡಂತಾಯಿತು.
[17]ಹೀಗಿರಲಾಗಿ ಈ ಕೆಟ್ಟ ಕಾರ್ಯಗಳನ್ನು ಮಾಡುವವನು ನಿಜ
ವಾಗಿಯೂ ನಾನಲ್ಲ. ನನ್ನಲ್ಲಿ ವಾಸವಾಗಿರುವ ಪಾಪವೇ ಈ
ಕೆಟ್ಟ ಕಾರ್ಯಗಳನ್ನು ಮಾಡುತ್ತದೆ. [18]ಹೌದು, ನನ್ನಲ್ಲಿ ಅಂದರೆ
ನನ್ನ ಪಾಪಾಧೀನ ಸ್ವಭಾವದಲ್ಲಿ ಒಳ್ಳೆಯದೇನೂ ವಾಸವಾಗಿಲ್ಲ
ವೆಂಬುದು ನನಗೆ ಗೊತ್ತಿದೆ. ಒಳ್ಳೆಯ ಕಾರ್ಯಗಳನ್ನು ಮಾಡು
ವುದಕ್ಕೆ ನನಗೆ ಮನಸ್ಸಿದ್ದರೂ ಅವುಗಳನ್ನು ಕಾರ್ಯಗತ
ಗೊಳಿಸಲು ನನಗೆ ಸಾಧ್ಯವಿಲ್ಲ. [19]ನಾನು ಮಾಡಲಿಚ್ಛಿಸುವ

---

**ಬೇರೆಯವರ … ಆಶಿಸಕೂಡದು** ವಿಮೋಚನ. 20:17; ಧರ್ಮೋಪ
ದೇಶ. 5:21.

ಒಳ್ಳೆಯ ಕಾರ್ಯಗಳನ್ನು ಮಾಡದೆ ಮಾಡಲಿಚ್ಛಿಸದಿರುವ ಕೆಟ್ಟ
ಕಾರ್ಯಗಳನ್ನೇ ಮಾಡುತ್ತೇನೆ. [20]ಹೀಗಿರಲಾಗಿ, ನಾನು ಮಾಡ
ಲಿಚ್ಛಿಸದಿರುವ ಕಾರ್ಯಗಳನ್ನು ನಾನು ಮಾಡಿದರೆ, ಅವುಗಳನ್ನು
ಮಾಡುವವನು ನಿಜವಾಗಿಯೂ ನಾನಲ್ಲ. ನನ್ನಲ್ಲಿ ವಾಸವಾಗಿ
ರುವ ಪಾಪವೇ ಆ ಕೆಟ್ಟ ಕಾರ್ಯಗಳನ್ನು ಮಾಡುತ್ತದೆ.

[21]ಹೀಗಿರಲಾಗಿ, ನಾನು ಈ ನಿಯಮವನ್ನು ಕಲಿತುಕೊಂಡಿ
ದ್ದೇನೆ: ನಾನು ಒಳ್ಳೆಯದನ್ನು ಮಾಡಲಿಚ್ಛಿಸುವಾಗ, ಕೆಟ್ಟದ್ದು
ನನ್ನೊಳಗೇ ಇರುತ್ತದೆ. [22]ನನ್ನ ಅಂತರಂಗದಲ್ಲಿ ದೇವರ
ನಿಯಮದ ವಿಷಯದಲ್ಲಿ ನಾನು ಸಂತೋಷಪಡುತ್ತೇನೆ. ಆದರೆ
ನನ್ನ ದೇಹದಲ್ಲಿ ಮತ್ತೊಂದು ನಿಯಮ ಕೆಲಸ ಮಾಡುತ್ತಿರು
ವುದನ್ನು ನಾನು ಕಾಣುತ್ತೇನೆ. ನನ್ನ ಅಂತರಂಗ ಒಪ್ಪಿಕೊಳ್ಳುವ
ನಿಯಮಕ್ಕೆ ವಿರುದ್ಧವಾಗಿ ಆ ನಿಯಮ ಹೋರಾಡುತ್ತದೆ. ನನ್ನ
ದೇಹದಲ್ಲಿ ಕೆಲಸ ಮಾಡುತ್ತಿರುವ ಆ ಮತ್ತೊಂದು ನಿಯಮವೇ
ಪಾಪದ ನಿಯಮವಾಗಿದೆ. ಆ ನಿಯಮವು ನನ್ನನ್ನು ತನ್ನ
ಸೆರೆಯಾಳನ್ನಾಗಿ ಮಾಡುತ್ತದೆ. [24]ನಾನು ದುರವಸ್ಥೆಗೆ ಒಳಗಾಗಿ
ದ್ದೇನೆ. ನನಗೆ ಮರಣವನ್ನು ತರುವ ಈ ದೇಹದಿಂದ ನನ್ನನ್ನು
ರಕ್ಷಿಸುವವರು ಯಾರು? [25]ದೇವರು ನನ್ನನ್ನು ರಕ್ಷಿಸುವನು!
ನಮ್ಮ ಪ್ರಭುವಾದ ಕ್ರಿಸ್ತ ಯೇಸುವಿನ ಮೂಲಕ ಆತನು
ದಯಪಾಲಿಸುವ ರಕ್ಷಣೆಗಾಗಿ ಆತನಿಗೆ ಸ್ತೋತ್ರವಾಗಲಿ!
ಆದ್ದರಿಂದ ನನ್ನ ಅಂತರಂಗದಲ್ಲಿ ನಾನು ದೇವರ ನಿಯಮಕ್ಕೆ
ಗುಲಾಮನಾಗಿದ್ದೇನೆ. ಆದರೆ ನನ್ನ ಪಾಪಾಧೀನ ಸ್ವಭಾವದಲ್ಲಿ
ನಾನು ಪಾಪದ ನಿಯಮಕ್ಕೆ ಗುಲಾಮನಾಗಿದ್ದೇನೆ.

### ಪವಿತ್ರಾತ್ಮನಿಗೆ ಅಧೀನವಾದ ಜೀವಿತ

8 ಆದುದರಿಂದ ಈಗ ಕ್ರಿಸ್ತ ಯೇಸುವಿನಲ್ಲಿರುವ ಜನರಿಗೆ
ಅಪರಾಧಿಗಳೆಂದು ತೀರ್ಪಾಗುವುದಿಲ್ಲ. [2]ನನಗೆ ಅಪರಾಧಿ
ಯೆಂದು ತೀರ್ಪಾಗದಿರುವುದೇಕೆ? ಏಕೆಂದರೆ ಕ್ರಿಸ್ತ ಯೇಸುವಿ
ನಲ್ಲಿರುವ ಜನರಿಗೆ ಜೀವವನ್ನು ತರುವ ಪವಿತ್ರಾತ್ಮನ ನಿಯಮವು
ನನ್ನನ್ನು ಪಾಪ ಮತ್ತು ಮರಣಗಳನ್ನು ತರುವ ನಿಯಮದಿಂದ
ಬಿಡುಗಡೆ ಮಾಡಿತು. [3]ಧರ್ಮಶಾಸ್ತ್ರವು ನಿರ್ಬಲವಾಗಿತ್ತು.
ಏಕೆಂದರೆ ನಮ್ಮ ಪಾಪಾಧೀನಸ್ವಭಾವವೇ ಅದನ್ನು ಬಲಹೀನ
ಗೊಳಿಸಿತು. ಹೀಗಿರಲಾಗಿ, ಧರ್ಮಶಾಸ್ತ್ರವು ಮಾಡಲಾಗದ್ದನ್ನು
ದೇವರು ಮಾಡಿದನು. ದೇವರು ತನ್ನ ಸ್ವಂತ ಮಗನನ್ನೇ
ಪಾಪಾಧೀನವಾದ ಮಾನವ ಸ್ವಭಾವದಲ್ಲಿ ಪಾಪಕ್ಕೆ ಪ್ರಾಯಶ್ಚಿತ್ತ
ವಾಗಿ ಕಳುಹಿಸಿಕೊಟ್ಟನು. ಆದಕಾರಣ ದೇವರು ಪಾಪಕ್ಕೆ ಮರಣ
ದಂಡನೆಯನ್ನು ವಿಧಿಸಲು ಮಾನವ ಸ್ವಭಾವವನ್ನೇ ಉಪ
ಯೋಗಿಸಿಕೊಂಡನು. [4]ಈಗ ನಮ್ಮ ಸ್ವಭಾವಕ್ಕನುಸಾರವಾಗಿ
ಜೀವಿಸದೆ ಪವಿತ್ರಾತ್ಮನಿಗನುಸಾರವಾಗಿ ಜೀವಿಸುತ್ತಿರುವ
ನಮ್ಮಲ್ಲಿ ಧರ್ಮಶಾಸ್ತ್ರದ ನಿಯಮಗಳು ನೆರವೇರಲೆಂದು
ದೇವರು ಹೀಗೆ ಮಾಡಿದನು.

[5]ತಮ್ಮ ಪಾಪಸ್ವಭಾವಕ್ಕನುಸಾರವಾಗಿ ಜೀವಿಸುವ ಜನರು
ತಮ್ಮ ಪಾಪಸ್ವಭಾವವು ಬಯಸುವ ಸಂಗತಿಗಳ ಬಗ್ಗೆ ಮಾತ್ರ
ಆಲೋಚಿಸುತ್ತಾರೆ. ಆದರೆ ಆತ್ಮನಿಗನುಸಾರವಾಗಿ ಜೀವಿಸುವ
ಜನರು ತಮ್ಮಿಂದ ಆತ್ಮನು ಅಪೇಕ್ಷಿಸುವ ಕಾರ್ಯಗಳ ಬಗ್ಗೆ
ಆಲೋಚಿಸುತ್ತಾರೆ. [6]ಒಬ್ಬನ ಆಲೋಚನೆಯು ಅವನ ಪಾಪ
ಸ್ವಭಾವದ ಹಿಡಿತಕ್ಕೆ ಒಳಪಟ್ಟಿದ್ದರೆ ಅವನಿಗೆ ಆತ್ಮಿಕ ಮರಣ
ವಾಗುತ್ತದೆ. ಆದರೆ ಒಬ್ಬನ ಆಲೋಚನೆಯು ಪವಿತ್ರಾತ್ಮನ
ಹತೋಟಿಗೆ ಒಳಪಟ್ಟಿದ್ದರೆ, ಅವನಲ್ಲಿ ಜೀವವೂ ಸಮಾಧಾನವೂ
ಇರುತ್ತದೆ. [7]ಏಕೆಂದರೆ ಒಬ್ಬನ ಆಲೋಚನೆಯು ಅವನ ಪಾಪಾ
ದೀನಸ್ವಭಾವದ ಹಿಡಿತಕ್ಕೆ ಒಳಪಟ್ಟಿದ್ದರೆ, ಅವನು ದೇವರಿಗೆ
ವಿರೋಧವಾಗಿದ್ದಾನೆ. ಅವನು ದೇವರ ನಿಮಯಕ್ಕೆ ವಿಧೇಯ
ನಾಗುವುದೂ ಇಲ್ಲ, ವಿಧೇಯನಾಗಲು ಸಾಧ್ಯವಿರುವುದೂ
ಇಲ್ಲ. [8]ತಮ್ಮ ಪಾಪ ಸ್ವಭಾವದ ಆಡಳಿತಕ್ಕೆ ಒಳಪಟ್ಟಿರುವ ಆ
ಜನರು ದೇವರನ್ನು ಮೆಚ್ಚಿಸಲು ಸಾಧ್ಯವಿಲ್ಲ.

[9]ಆದರೆ ನೀವು ನಿಮ್ಮ ಪಾಪಸ್ವಭಾವದ ಆಡಳಿತಕ್ಕೆ
ಒಳಗಾಗಿಲ್ಲ. ದೇವರಾತ್ಮನು ನಿಮ್ಮಲ್ಲಿ ನಿಜವಾಗಿಯೂ
ವಾಸವಾಗಿದ್ದರೆ, ನೀವು ಪವಿತ್ರಾತ್ಮನ ಆಡಳಿತಕ್ಕೆ ಒಳಗಾಗಿದ್ದೀರಿ.
ಯಾವನಲ್ಲಾದರೂ ಕ್ರಿಸ್ತನ ಆತ್ಮನು ಇಲ್ಲದಿದ್ದರೆ, ಅವನು
ಕ್ರಿಸ್ತನಿಗೆ ಸೇರಿದವನಲ್ಲ. [10]ನಿಮ್ಮ ದೇಹವು ಪಾಪದ
ದೆಸೆಯಿಂದಾಗಿ ಯಾವಾಗಲೂ ಸತ್ತದ್ದಾಗಿದೆ. ಆದರೆ ಕ್ರಿಸ್ತನು
ನಿಮ್ಮಲ್ಲಿದ್ದರೆ ಆತ್ಮನು ನಿಮಗೆ ಜೀವವನ್ನು ಕೊಡುತ್ತಾನೆ.
ಏಕೆಂದರೆ ಕ್ರಿಸ್ತನು ನಿಮ್ಮನ್ನು ನೀತಿವಂತರನ್ನಾಗಿ ಮಾಡಿದ್ದಾನೆ.
[11]ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದ
ದೇವರ ಆತ್ಮನು ನಿಮ್ಮಲ್ಲಿ ವಾಸವಾಗಿದ್ದರೆ, ಸತ್ತುಹೋಗುವ
ನಿಮ್ಮ ದೇಹಗಳಿಗೆ ಆತನು ಜೀವವನ್ನು ಸಹ ಕೊಡುತ್ತಾನೆ.
ಕ್ರಿಸ್ತನನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದಾತನು
ದೇವರೇ. ನಿಮ್ಮಲ್ಲಿ ವಾಸವಾಗಿರುವ ಪವಿತ್ರಾತ್ಮನ ಮೂಲಕ
ಆತನು ನಿಮ್ಮ ದೇಹಗಳಿಗೆ ಜೀವವನ್ನು ಕೊಡುತ್ತಾನೆ.

[12]ಆದ್ದರಿಂದ, ನನ್ನ ಸಹೋದರ ಸಹೋದರಿಯರೇ, ನಾವು
ನಮ್ಮ ಪಾಪಾಧೀನ ಸ್ವಭಾವದ ಆಳ್ವಿಕೆಗೆ ಒಳಗಾಗಿರಬಾರದು.
ನಮ್ಮ ಪಾಪಸ್ವಭಾವದ ಬಯಕೆಗನುಸಾರವಾಗಿ ನಾವು ಜೀವಿಸ
ಕೂಡದು. [13]ನಿಮ್ಮ ಪಾಪಸ್ವಭಾವವು ಬಯಸುವ ಕೆಟ್ಟಕಾರ್ಯ
ಗಳನ್ನು ಮಾಡುವುದಕ್ಕಾಗಿ ನೀವು ನಿಮ್ಮ ಜೀವಿತವನ್ನು ಉಪ
ಯೋಗಿಸಿದರೆ, ನೀವು ಆತ್ಮಿಕವಾಗಿ ಸಾಯುವಿರಿ. ಆದರೆ ನೀವು
ನಿಮ್ಮ ದೇಹದ ಮೂಲಕವಾಗಿ ಮಾಡುವ ಕೆಟ್ಟಕಾರ್ಯಗಳನ್ನು
ಪವಿತ್ರಾತ್ಮನ ಸಹಾಯದಿಂದ ನಿಲ್ಲಿಸಿದರೆ ಹೊಸ ಜೀವಿತವನ್ನು
ಹೊಂದಿಕೊಳ್ಳುವಿರಿ.

[14]ಯಾರು ತಮ್ಮನ್ನು ದೇವರಾತ್ಮನ ನಡೆಸುವಿಕೆಗೆ ಒಪ್ಪಿಸಿ
ಕೊಡುತ್ತಾರೊ ಅವರೇ ದೇವರ ಮಕ್ಕಳಾಗಿದ್ದಾರೆ. [15]ನಾವು
ಹೊಂದಿಕೊಂಡಿರುವ ಆತ್ಮನು ನಮ್ಮನ್ನು ಮತ್ತೆ ಗುಲಾಮರನ್ನಾಗಿ
ಮಾಡುವವನಲ್ಲ ಮತ್ತು ನಮ್ಮಲ್ಲಿ ಭಯವನ್ನು ಹುಟ್ಟಿಸು
ವವನಲ್ಲ. ನಾವು ಹೊಂದಿರುವ ಪವಿತ್ರಾತ್ಮನು ನಮ್ಮನ್ನು ದೇವರ
ಮಕ್ಕಳನ್ನಾಗಿ ಮಾಡುತ್ತಾನೆ. ಈ ಆತ್ಮನ ಮೂಲಕವಾಗಿ ನಾವು,
‘‘ಅಪ್ಪಾ ತಂದೆಯೇ’’ ಎಂದು ಹೇಳುತ್ತೇವೆ. [16]ನಾವು ದೇವರ
ಮಕ್ಕಳಾಗಿದ್ದೇವೆಂದು ಪವಿತ್ರಾತ್ಮನು ತಾನೇ ನಮ್ಮ ಅಂತರಾತ್ಮ
ದೊಂದಿಗೆ ಹೇಳುತ್ತಾನೆ, [17]ನಾವು ದೇವರ ಮಕ್ಕಳಾಗಿದ್ದರೆ,
ಬಾಧ್ಯರಾಗಿದ್ದೇವೆ. ಹೌದು, ದೇವರಿಗೆ ಬಾಧ್ಯರಾಗಿದ್ದೇವೆ ಮತ್ತು
ಕ್ರಿಸ್ತನೊಂದಿಗೆ ಬಾಧ್ಯರಾಗಿದ್ದೇವೆ. ಹೇಗೆಂದರೆ, ಕ್ರಿಸ್ತನ ಬಾಧೆ
ಯಲ್ಲಿ ನಾವು ಪಾಲುಗಾರರಾಗುವುದಾದರೆ ಆತನ ಮಹಿಮೆ
ಯಲ್ಲಿಯೂ ಪಾಲುಗಾರರಾಗುವೆವು.

### ಭವಿಷ್ಯತ್ತಿನಲ್ಲಿ ನಮಗೆ ಮಹಿಮೆ ದೊರೆಯುವುದು

[18]ಈಗ ನಾವು ಕಷ್ಟಸಂಕಟಗಳನ್ನು ಸಹಿಸಿಕೊಳ್ಳುತ್ತೇವೆ.
ಆದರೆ ನಮಗೆ ಮುಂದೆ ಕೊಡಲ್ಪಡುವ ಮಹಿಮೆಗೆ ಈ

ಕಷ್ಟಸಂಕಟಗಳನ್ನು ಹೋಲಿಸಿದರೆ ಇವು ಗಣನೆಗೆ ಬರುವುದಿಲ್ಲ.
19ದೇವರು ತನ್ನ ಮಕ್ಕಳನ್ನು ಪ್ರತ್ಯಕ್ಷಪಡಿಸುವ ಕಾಲಕ್ಕಾಗಿ ದೇವರ
ಸರ್ವಸೃಷ್ಟಿಯು ಉತ್ಸುಕತೆಯಿಂದ ಎದುರುನೋಡುತ್ತಿದೆ. ಅದು
ಸಂಭವಿಸಲೆಂದು ಇಡೀ ಜಗತ್ತೇ ಹಂಬಲಿಸುತ್ತಿದೆ. 20ಸರ್ವ
ಸೃಷ್ಟಿಯು ನಿರರ್ಥಕತೆಗೆ ಒಳಗಾಯಿತು. ಹೀಗಾದದ್ದು ಅದರ
ಸ್ವಂತ ಇಚ್ಛೆಯಿಂದಲ್ಲ, ದೇವರ ಇಚ್ಛೆಯಿಂದಲೇ. ಆದರೂ
ಅದಕ್ಕೆ ನಿರೀಕ್ಷೆಯಿತ್ತು. ಅದೇನಂದರೆ: 21ಸರ್ವಸೃಷ್ಟಿಯು
ನಾಶನದಿಂದ ಬಿಡುಗಡೆಯಾಗಿ ದೇವರ ಮಕ್ಕಳ ಸ್ವತಂತ್ರವನ್ನೂ
ಮಹಿಮೆಯನ್ನೂ ಹೊಂದಿಕೊಳ್ಳುತ್ತದೆ ಎಂಬುದೇ.

22ದೇವರು ಸೃಷ್ಟಿಮಾಡಿದ ಪ್ರತಿಯೊಂದು, ಪ್ರಸವ ವೇದನೆ
ಪಡುತ್ತಿರುವ ಸ್ತ್ರೀಯಂತೆ ನೋವಿನಿಂದ ನರಳುತ್ತಾ ಇಂದಿನ
ವರೆಗೂ ಕಾಯುತ್ತಿದೆ ಎಂಬುದು ನಮಗೆ ಗೊತ್ತಿದೆ. 23ಜಗತ್ತು
ಮಾತ್ರವೇ ಅಲ್ಲ. ನಾವು ಸಹ ನಮ್ಮೊಳಗೆ ನೋವಿನಿಂದ ನರಳುತ್ತಾ
ಕಾಯುತ್ತಿದ್ದೇವೆ. ದೇವರ ವಾಗ್ದಾನದ ಮೊದಲನೆ ಭಾಗವಾಗಿ
ರುವ ಪವಿತ್ರಾತ್ಮನನ್ನು ನಾವು ಹೊಂದಿಕೊಂಡಿದ್ದೇವೆ. ನಮ್ಮನ್ನು
ತನ್ನ ಸ್ವಂತ ಮಕ್ಕಳನ್ನಾಗಿ ಮಾಡಿಕೊಳ್ಳಲು ದೇವರು ಮಾಡು
ತ್ತಿರುವ ಕಾರ್ಯವು ಸಂಪೂರ್ಣಗೊಳ್ಳುವುದನ್ನೇ ಅಂದರೆ, ನಮ್ಮ
ದೇಹಗಳಿಗಾಗುವ ಬಿಡುಗಡೆಯನ್ನೇ ನಾವು ಎದುರುನೋಡು
ತ್ತಿದ್ದೇವೆ.

24ನಾವು ರಕ್ಷಣೆ ಹೊಂದಿದ್ದೇವೆ ಮತ್ತು ನಮಗಿನ್ನೂ ಆ
ನಿರೀಕ್ಷೆಯಿದೆ. ನಾವು ಯಾವುದಕ್ಕೋಸ್ಕರ ಕಾಯುತ್ತಿದ್ದೇವೊ
ಅದನ್ನು ಕಾಣಬಲ್ಲವರಾಗಿದ್ದರೆ, ಅದು ನಿಜವಾದ ನಿರೀಕ್ಷೆ
ಯಲ್ಲ. ಜನರು ತಾವು ಈಗಾಗಲೇ ಹೊಂದಿರುವ ಯಾವುದನ್ನೂ
ನಿರೀಕ್ಷಿಸುವುದಿಲ್ಲ. 25ಆದರೆ ನಾವಿನ್ನೂ ಹೊಂದಿಕೊಂಡಿಲ್ಲದೆ
ಇರುವುದನ್ನು ನಿರೀಕ್ಷಿಸುತ್ತಾ ತಾಳ್ಮೆಯಿಂದ ಅದಕ್ಕಾಗಿ
ಕಾಯುತ್ತಿದ್ದೇವೆ.

26ನಾವು ಬಲಹೀನರಾಗಿರುವುದರಿಂದ ನಮ್ಮ ಬಲಹೀನತೆ
ಯಲ್ಲಿ ಪವಿತ್ರಾತ್ಮನು ನಮಗೆ ಸಹಾಯ ಮಾಡುತ್ತಾನೆ. ನಾವು
ಹೇಗೆ ಪ್ರಾರ್ಥಿಸಬೇಕು ಮತ್ತು ಯಾವುದಕ್ಕಾಗಿ ಪ್ರಾರ್ಥಿಸಬೇಕು
ಎಂಬುದು ನಮಗೆ ತಿಳಿಯದು. ಆದರೆ ಪವಿತ್ರಾತ್ಮನು ತಾನೇ
ನಮಗೋಸ್ಕರ ದೇವರಲ್ಲಿ ವಿವರಿಸಲಾಗದ ಅಂತರ್ಭಾವದಿಂದ
ಬೇಡಿಕೊಳ್ಳುತ್ತಾನೆ. 27ಅಂತರಂಗವನ್ನು ನೋಡಬಲ್ಲ ದೇವರಿಗೆ
ಪವಿತ್ರಾತ್ಮನ ಮನಸ್ಸಿನಲ್ಲಿರುವುದೆಲ್ಲಾ ಗೊತ್ತಿದೆ, ಏಕೆಂದರೆ
ದೇವರ ಚಿತ್ತಕ್ಕನುಸಾರವಾಗಿಯೇ ಪವಿತ್ರಾತ್ಮನು ದೇವಜನರಿ
ಗೋಸ್ಕರ ದೇವರಲ್ಲಿ ವಿಜ್ಞಾಪಿಸುತ್ತಾನೆ.

28ದೇವರು ತನ್ನನ್ನು ಪ್ರೀತಿಸುವವರ ಒಳ್ಳೆಯದಕ್ಕಾಗಿ
ಪ್ರತಿಯೊಂದು ಕಾರ್ಯವನ್ನೂ ಅನುಕೂಲ ಮಾಡುತ್ತಾನೆಂದು
ನಮಗೆ ಗೊತ್ತಿದೆ. ಆ ಜನರನ್ನು ದೇವರೇ ಆರಿಸಿಕೊಂಡನು,
ಏಕೆಂದರೆ ಅದು ಆತನ ಯೋಜನೆಯಾಗಿತ್ತು. 29ದೇವರು ತಾನು
ಜಗತ್ತನ್ನು ಸೃಷ್ಟಿಸುವುದಕ್ಕಿಂತ ಮೊದಲೇ ಆ ಜನರನ್ನು ಬಲ್ಲವ
ನಾಗಿದ್ದನು ಮತ್ತು ಆ ಜನರು ತನ್ನ ಮಗನ ಅನುರೂಪಿ
ಗಳಾಗಿರಬೇಕೆಂದು ನಿರ್ಧರಿಸಿದನು. ಹೀಗಿರಲಾಗಿ, ಅನೇಕ
ಸಹೋದರ ಸಹೋದರಿಯರಲ್ಲಿ ಯೇಸುವೇ ಹಿರಿಯವ
ನಾಗಿದ್ದಾನೆ. 30ಆ ಜನರು ತನ್ನ ಮಗನ ಅನುರೂಪಿಗಳಾಗಿರ
ಬೇಕೆಂಬ ತನ್ನ ಯೋಜನೆಗನುಸಾರವಾಗಿ ದೇವರು ಅವರನ್ನು
ಕರೆದು, ನೀತಿವಂತರನ್ನಾಗಿ ಮಾಡಿ, ಅವರಿಗೆ ತನ್ನ ಮಹಿಮೆ
ಯನ್ನು ಕೊಟ್ಟನು.

## ಕ್ರಿಸ್ತ ಯೇಸುವಿನಲ್ಲಿ ದೇವರ ಪ್ರೀತಿ

31ಹೀಗಿರುವಲ್ಲಿ ಇದರ ಬಗ್ಗೆ ನಾವು ಏನು ಹೇಳೋಣ?
ದೇವರು ನಮ್ಮೊಂದಿಗೆ ಇರುವಾಗ, ನಮ್ಮನ್ನು ಯಾರೂ
ಸೋಲಿಸಲಾರರು. 32ದೇವರು ತನ್ನ ಸ್ವಂತ ಮಗನನ್ನೇ
ಉಳಿಸಿಕೊಳ್ಳದೆ ನಮ್ಮೆಲ್ಲರಿಗೋಸ್ಕರ ಕೊಟ್ಟನು. ಆದ್ದರಿಂದ
ಈಗ, ದೇವರು ಯೇಸುವಿನೊಂದಿಗೆ ನಮಗೆ ಎಲ್ಲವನ್ನು
ಖಂಡಿತವಾಗಿ ಕೊಡುತ್ತಾನೆ. 33ದೇವರು ಆರಿಸಿಕೊಂಡಿರುವ
ಜನರ ಮೇಲೆ ಯಾರು ದೋಷಾರೋಪಣೆ ಮಾಡಬಲ್ಲರು?
ಯಾರೂ ಇಲ್ಲ! ಅವರನ್ನು ನೀತಿವಂತರನ್ನಾಗಿ ಮಾಡುವಾತನು
ದೇವರೇ. 34ದೇವ ಜನರು ದೋಷಿಗಳೆಂದು ಯಾರು
ಹೇಳಬಲ್ಲರು? ಯಾರೂ ಇಲ್ಲ! ಕ್ರಿಸ್ತ ಯೇಸು ನಮಗೋಸ್ಕರ
ಪ್ರಾಣಕೊಟ್ಟನು. ಅಷ್ಟೇ ಅಲ್ಲ, ಆತನು ಸತ್ತವರೊಳಗಿಂದ
ಜೀವಂತವಾಗಿ ಎದ್ದುಬಂದನು. ಈಗ ಆತನು ದೇವರ ಬಲಗಡೆ
ಯಲ್ಲಿದ್ದಾನೆ ಮತ್ತು ನಮಗೋಸ್ಕರ ದೇವರನ್ನು ಬೇಡಿಕೊಳ್ಳು
ತ್ತಿದ್ದಾನೆ. 35ಕ್ರಿಸ್ತನ ಪ್ರೀತಿಯಿಂದ ಯಾವುದು ನಮ್ಮನ್ನು
ಬೇರ್ಪಡಿಸಬಲ್ಲದು? ಕಷ್ಟಸಂಕಟಗಳಾಗಲಿ ಇಕ್ಕಟ್ಟುಗಳಾಗಲಿ
ಹಿಂಸೆಯಾಗಲಿ ಆಹಾರವಿಲ್ಲದಿರುವುದಾಗಲಿ ಬಟ್ಟೆಯಿಲ್ಲ
ದಿರುವುದಾಗಲಿ ಅಪಾಯವಾಗಲಿ ಮರಣವಾಗಲಿ ನಮ್ಮನ್ನು
ಕ್ರಿಸ್ತನ ಪ್ರೀತಿಯಿಂದ ಬೇರ್ಪಡಿಸಬಲ್ಲವೇ? ಇಲ್ಲ! 36ಪವಿತ್ರ
ಗ್ರಂಥದಲ್ಲಿ ಹೀಗೆ ಬರೆಯಲ್ಪಟ್ಟಿದೆ:

> “ನಿನಗೋಸ್ಕರವಾಗಿ ನಾವು ಎಲ್ಲಾ ಸಮಯಗಳಲ್ಲಿ
> ಸಾವಿನ ದವಡೆಯಲ್ಲಿದ್ದೇವೆ. ಕೊಯ್ಯಲು
> ಕೊಂಡೊಯ್ಯುವ ಕುರಿಗಳಿಗಿಂತ ಕಡೆಗಣಿಸ
> ಲ್ಪಟ್ಟಿದ್ದೇವೆ.” *ಕೀರ್ತನೆ 44:22*

37ಆದರೆ ನಮಗೋಸ್ಕರ ತನ್ನ ಪ್ರೀತಿಯನ್ನು ತೋರಿಸಿದ
ದೇವರ ಮೂಲಕವಾಗಿ ಈ ಎಲ್ಲಾ ಸಂಗತಿಗಳಲ್ಲಿ ನಮಗೆ ಪೂರ್ಣ
ಜಯವಿದೆ. 38-39ಹೌದು, ದೇವರ ಪ್ರೀತಿಯಿಂದ ನಮ್ಮನ್ನು
ಯಾವುದೂ ಬೇರ್ಪಡಿಸಲಾರದೆಂದು ನನಗೆ ನಿಶ್ಚಯವಾಗಿ
ತಿಳಿದಿದೆ. ಮರಣವಾಗಲಿ ಜೀವವಾಗಲಿ ದೇವದೂತರಾಗಲಿ
ದುರಾತ್ಮಗಳಾಗಲಿ ಈಗಿನ ಸಂಗತಿಗಳಾಗಲಿ ಮುಂದಿನ ಸಂಗತಿ
ಗಳಾಗಲಿ ಯಾವ ಶಕ್ತಿಗಳೇ ಆಗಲಿ ಮೇಲಿನ ಸಂಗತಿಗಳಾಗಲಿ
ಕೆಳಗಿನ ಸಂಗತಿಗಳಾಗಲಿ ಅಥವಾ ಇಡೀ ಜಗತ್ತಿನಲ್ಲಿರುವ
ಯಾವುದೇ ಸಂಗತಿಗಳಾಗಲಿ ನಮ್ಮ ಪ್ರಭುವಾದ ಕ್ರಿಸ್ತ ಯೇಸು
ವಿನಲ್ಲಿ ತೋರಿಬಂದ ದೇವರ ಪ್ರೀತಿಯಿಂದ ನಮ್ಮನ್ನು
ಬೇರ್ಪಡಿಸಲು ಸಾಧ್ಯವಿಲ್ಲ.

## ದೇವರು ಮತ್ತು ಯೆಹೂದ್ಯರು

9 ನಾನು ಕ್ರಿಸ್ತನಲ್ಲಿದ್ದೇನೆ ಮತ್ತು ನಿಮಗೆ ಸತ್ಯವನ್ನೇ
ಹೇಳುತ್ತಿದ್ದೇನೆ. ನಾನು ಸುಳ್ಳಾಡುವುದಿಲ್ಲ. ನನ್ನ ಆಲೋ
ಚನೆಗಳು ಪವಿತ್ರಾತ್ಮನ ಆಳ್ವಿಕೆಗೆ ಒಳಪಟ್ಟಿವೆ. ನನ್ನ ಮನಸ್ಸೇ ಇದಕ್ಕೆ
ಸಾಕ್ಷಿ. 2ಯೆಹೂದ್ಯರ ವಿಷಯದಲ್ಲಿ ನನಗೆ ಅತೀವ ದುಃಖವಿದೆ;
ನಿರಂತರ ಮನೋವೇದನೆಯಿದೆ. 3ಅವರು ನನ್ನ ಸಹೋದರ
ಸಹೋದರಿಯರಾಗಿದ್ದಾರೆ; ಇಹಲೋಕದ ಕುಟುಂಬದವ
ರಾಗಿದ್ದಾರೆ. ಅವರಿಗೆ ಸಹಾಯ ಮಾಡಲು ಕ್ರಿಸ್ತನನ್ನು ಅಗಲಿ
ಶಾಪಗ್ರಸ್ತನಾಗುವುದಕ್ಕೂ ಸಿದ್ಧನಾಗಿದ್ದೇನೆ. 4ಅವರು ಇಸ್ರೇಲಿನ

ಜನರು. ಅವರು ದೇವರಿಂದ ಆರಿಸಲ್ಪಟ್ಟ ಮಕ್ಕಳು. ಅವರು
ದೇವರ ಮಹಿಮೆಯನ್ನು ಮತ್ತು ದೇವರು ಅವರೊಂದಿಗೆ ಮಾಡಿ
ಕೊಂಡ ಒಡಂಬಡಿಕೆಗಳನ್ನು ಹೊಂದಿದ್ದಾರೆ. ದೇವರು ಅವರಿಗೆ
ಮೋಶೆಯ ಧರ್ಮಶಾಸ್ತ್ರವನ್ನೂ ಸರಿಯಾದ ಆರಾಧನೆಯ
ಕ್ರಮವನ್ನೂ ತನ್ನ ವಾಗ್ದಾನಗಳನ್ನೂ ಕೊಟ್ಟನು. 5ಅವರು ನಮ್ಮ
ಪಿತೃಗಳ ಸಂತಾನಗಳಿಗೆ ಸೇರಿದವರಾಗಿದ್ದಾರೆ; ಕ್ರಿಸ್ತನು ಶಾರೀರಿಕ
ವಾಗಿ ಇವರ ವಂಶದಲ್ಲಿಯೇ ಹುಟ್ಟಿದನು. ಕ್ರಿಸ್ತನು ಸಕಲಕ್ಕೂ
ಒಡೆಯನಾಗಿದ್ದಾನೆ. ಆತನಿಗೆ ಎಂದೆಂದಿಗೂ ಸ್ತೋತ್ರವಾಗಲಿ!
ಆಮೆನ್. 6ಹೌದು, ನಾನು ಯೆಹೂದ್ಯರ ವಿಷಯದಲ್ಲಿ
ದುಃಖಿಸುತ್ತೇನೆ. ದೇವರು ತನ್ನ ವಾಗ್ದಾನವನ್ನು
ನೆರವೇರಿಸುವುದರಲ್ಲಿ ವಿಫಲನಾದನೆಂದು ನಾನು ಹೇಳುತ್ತಿಲ್ಲ.
ಏಕೆಂದರೆ ಇಸ್ರೇಲ್ ವಂಶದಲ್ಲಿ ಹುಟ್ಟಿದವರೆಲ್ಲರೂ ದೇವರ
ಮಕ್ಕಳಲ್ಲ. 7ಅಬ್ರಹಾಮನ ಸಂತತಿಗಳವರಲ್ಲಿ ಕೆಲವರು ಮಾತ್ರ
ನಿಜವಾಗಿಯೂ ಅಬ್ರಹಾಮನ ಮಕ್ಕಳಾಗಿದ್ದಾರೆ. ದೇವರು
ಅವನಿಗೆ, ‘‘ಇಸಾಕನು ಮಾತ್ರ ನಿನಗೆ ನ್ಯಾಯಬದ್ಧವಾದ
ಮಗನು’’ * ಎಂದು ಹೇಳಿದನು. 8ಇದರರ್ಥವೇನೆಂದರೆ,
ಶರೀರಸಂಬಂಧವಾಗಿ ಹುಟ್ಟಿದವರೆಲ್ಲರೂ ದೇವರ ಮಕ್ಕಳಲ್ಲ,
ವಾಗ್ದಾನ ಸಂಬಂಧವಾಗಿ ಹುಟ್ಟಿದವರೇ ದೇವರ (ನಿಜ)
ಮಕ್ಕಳಾಗಿದ್ದಾರೆ. 9ದೇವರು ಅವನಿಗೆ, ‘‘ನಿಯಮಿತ ಕಾಲದಲ್ಲಿ
ನಾನು ಹಿಂತಿರುಗಿ ಬರುವೆನು, ಆಗ ಸಾರಳಿಗೆ ಒಬ್ಬ
ಮಗನಿರುವನು’’ * ಎಂಬ ವಾಗ್ದಾನ ಮಾಡಿದ್ದನು.

10ಅದಷ್ಟೇ ಅಲ್ಲ, ರೆಬೆಕ್ಕಳಿಗೂ ಇಬ್ಬರು ಗಂಡು
ಮಕ್ಕಳಿದ್ದರು. ಅವರಿಬ್ಬರಿಗೂ ಒಬ್ಬನೇ ತಂದೆ. ಅವನೇ ನಮ್ಮ
ಪಿತೃವಾದ ಇಸಾಕನು. 11-12ಆದರೆ ಆ ಇಬ್ಬರು ಗಂಡುಮಕ್ಕಳು
ಹುಟ್ಟುವ ಮೊದಲೇ, ದೇವರು ರೆಬೆಕ್ಕಳಿಗೆ, ‘‘ಹಿರಿಯವನು
ಕಿರಿಯವನ ಸೇವೆ ಮಾಡುವನು’’ * ಎಂದು ಹೇಳಿದನು. ಆ
ಬಾಲಕರು ಯಾವ ಒಳ್ಳೆಯದಾಗಲಿ ಕೆಟ್ಟದ್ದಾಗಲಿ ಮಾಡುವ
ಮೊದಲೇ ಇದಾಯಿತು. ದೇವರು ಆ ಬಾಲಕನನ್ನು ತನ್ನ ಸ್ವಂತ
ಯೋಜನೆಗನುಸಾರವಾಗಿ ಆರಿಸಿಕೊಂಡಿದ್ದರಿಂದ ಆ ಬಾಲಕರು
ಹುಟ್ಟುವದಕ್ಕಿಂತ ಮೊದಲೇ ಹೀಗೆ ಹೇಳಿದನು. ದೇವರು
ಅವನನ್ನು ಆರಿಸಿಕೊಂಡಿದ್ದರಿಂದ ಅವನನ್ನೇ ಕರೆಯ
ಬೇಕೆಂದಿದ್ದನು. ಆದರೆ ಅದು ಆ ಬಾಲಕರ ಯಾವುದೇ ಕಾರ್ಯ
ಗಳ ಮೇಲೆ ಆಧಾರಗೊಂಡಿರಲಿಲ್ಲ. 13ಅಂತೆಯೇ, ‘‘ನಾನು
ಯಾಕೋಬನನ್ನು ಪ್ರೀತಿಸಿದೆನು, ಆದರೆ ಏಸಾವನನ್ನು ದ್ವೇಷಿಸಿ
ದೆನು’’ * ಎಂದು ಪವಿತ್ರ ಗ್ರಂಥವು ಹೇಳುತ್ತದೆ.

14ಹಾಗಾದರೆ, ಇದರ ಬಗ್ಗೆ ಏನು ಹೇಳೋಣ? ದೇವರು
ಅನ್ಯಾಯಗಾರನೇ? ಎಂದಿಗೂ ಇಲ್ಲ. 15ದೇವರು ಮೋಶೆಗೆ,
‘‘ನಾನು ಯಾರಿಗೆ ಕರುಣೆ ತೋರಬಯಸುತ್ತೇನೋ ಅವನಿಗೆ
ಕರುಣೆ ತೋರುವೆನು. ನಾನು ಯಾರಿಗೆ ಕನಿಕರ ತೋರ
ಬಯಸುತ್ತೇನೋ ಅವರಿಗೆ ಕನಿಕರ ತೋರುವೆನು.’’ * ಎಂದು
ಹೇಳಿದ್ದಾನೆ.

16ಆದ್ದರಿಂದ ದೇವರು ತಾನು ಯಾರಿಗೆ ಕರುಣೆ
ತೋರಬಯಸುತ್ತಾನೊ ಅವನನ್ನೇ ಆರಿಸಿಕೊಳ್ಳುತ್ತಾನೆ. ಆತನ
ಆಯ್ಕೆಯು ಜನರು ಏನು ಮಾಡಬಯಸುತ್ತಾರೆ ಅಥವಾ ಏನು
ಮಾಡಲು ಪ್ರಯತ್ನಿಸುತ್ತಾರೆ ಎಂಬುದರ ಮೇಲೆ ಆಧಾರ
ಗೊಂಡಿಲ್ಲ. 17ಪವಿತ್ರ ಗ್ರಂಥದಲ್ಲಿ ದೇವರು ಫರೋಹನಿಗೆ,
‘‘ನಾನು ನಿನ್ನಲ್ಲಿ ನನ್ನ ಶಕ್ತಿಯನ್ನು ತೋರಿಸಬೇಕೆಂತಲೂ ನನ್ನ
ಹೆಸರನ್ನು ಲೋಕದಲ್ಲೆಲ್ಲಾ ಪ್ರಖ್ಯಾತಿಪಡಿಸಬೇಕೆಂತಲೂ
ನಿನ್ನನ್ನು ರಾಜನನ್ನಾಗಿ ಮಾಡಿದೆನು.’’ * ಎಂದು ಹೇಳಿದ್ದಾನೆ.
18ಆದ್ದರಿಂದ ದೇವರು ತಾನು ಯಾರಿಗೆ ಕರುಣೆಯನ್ನು ತೋರ
ಬಯಸುತ್ತಾನೋ ಅವರಿಗೆ ಕರುಣೆಯನ್ನು ತೋರಿಸುತ್ತಾನೆ.
ದೇವರು ಯಾರನ್ನು ಮೊಂಡರನ್ನಾಗಿ ಮಾಡಬಯಸುತ್ತಾನೋ
ಅವರನ್ನು ಮೊಂಡರನ್ನಾಗಿ ಮಾಡುತ್ತಾನೆ.

19‘‘ನಾವು ಮಾಡುವ ಕಾರ್ಯಗಳು ದೇವರ ಹಿಡಿತಕ್ಕೆ ಒಳ
ಗಾಗಿರುವುದಾದರೆ, ನಮ್ಮ ಪಾಪಗಳ ನಿಮಿತ್ತ ದೇವರು ನಮ್ಮನ್ನು
ದೂಷಿಸುವುದೇಕೆ?’’ ಎಂದು ನಿಮ್ಮಲ್ಲಿ ಒಬ್ಬನು ಕೇಳಬಹುದು.
20ಹಾಗೆ ಕೇಳಬೇಡಿ. ನೀವು ಕೇವಲ ಮನುಷ್ಯರು. ದೇವರನ್ನು
ಪ್ರಶ್ನಿಸಲು ಮನುಷ್ಯರಿಗೆ ಯಾವ ಹಕ್ಕೂ ಇಲ್ಲ. ಮಡಕೆಯು
ತನ್ನನ್ನು ತಯಾರಿಸಿದವನಿಗೆ, ‘‘ನೀನು ನನ್ನನ್ನು ಈ ರೀತಿ
ತಯಾರಿಸಿದ್ದೇಕೆ’’ ಎಂದು ಕೇಳುವುದುಂಟೇ? 21ಕುಂಬಾರನು
ತನಗೆ ಇಷ್ಟಬಂದಂತೆ ಒಂದೇ ಮಣ್ಣಿನಿಂದ ವಿವಿಧ ವಸ್ತುಗಳನ್ನು
ತಯಾರಿಸುವುದಿಲ್ಲವೇ? ಅವನು ಒಂದನ್ನು ವಿಶೇಷವಾದ
ಬಳಕೆಗಾಗಿಯೂ ಮತ್ತೊಂದನ್ನು ದೈನಂದಿನ ಬಳಕೆಗಾಗಿಯೂ
ತಯಾರಿಸುವನು.

22ದೇವರು ಮಾಡಿರುವುದು ಸಹ ಹೀಗೆಯೇ. ಆತನು ತನ್ನ
ಕೋಪವನ್ನು ತೋರಿಸಿ, ತನ್ನ ಶಕ್ತಿಯನ್ನು ಜನರಿಗೆ ಪ್ರಸಿದ್ಧಿ
ಪಡಿಸಬೇಕೆಂದಿದ್ದನು. ಆದರೂ ಆತನು ತನ್ನ ಕೋಪಕ್ಕೆ ಗುರಿ
ಯಾಗಿ ನಾಶವಾಗಲಿದ್ದ ಜನರನ್ನು ಬಹು ಸಹನೆಯಿಂದ
ಸಹಿಸಿಕೊಂಡನು. 23ದೇವರು ತನ್ನ ಅತಿಶಯವಾದ ಮಹಿಮೆ
ಯನ್ನು ತೋರ್ಪಡಿಸಬೇಕೆಂದು ತಾಳ್ಮೆಯಿಂದ ಕಾದುಕೊಂಡಿ
ದ್ದನು. ತನ್ನ ಕರುಣೆಯನ್ನು ಹೊಂದಿಕೊಳ್ಳುವ ಜನರಿಗೆ ದೇವರು
ಆ ಮಹಿಮೆಯನ್ನು ಕೊಡಬೇಕೆಂದಿದ್ದನು. ತನ್ನ ಮಹಿಮೆಯನ್ನು
ಹೊಂದಿಕೊಳ್ಳಲೆಂದು ದೇವರು ಆ ಜನರನ್ನು ಸಿದ್ಧಪಡಿಸಿದನು.
24ನಾವೇ ಆ ಜನರು. ದೇವರಿಂದ ಕರೆಯಲ್ಪಟ್ಟ ಜನರು
ನಾವೇ. ದೇವರು ನಮ್ಮನ್ನು ಯೆಹೂದ್ಯರೊಳಗಿಂದ ಮತ್ತು
ಯೆಹೂದ್ಯರಲ್ಲದವರೊಳಗಿಂದ ಕರೆದನು. 25ಪವಿತ್ರ ಗ್ರಂಥದ
ಹೊಶೇಯನ ಪುಸ್ತಕದಲ್ಲಿ ಈ ರೀತಿ ಬರೆಯಲ್ಪಟ್ಟಿದೆ:

> ‘‘ನನ್ನವರಲ್ಲದ ಜನರನ್ನು ನನ್ನ ಜನರೆಂದು
> ಹೇಳುವೆನು. ನನಗೆ ಪ್ರಿಯರಲ್ಲದವರನ್ನು ನನಗೆ
> ಪ್ರಿಯರೆಂದು ಹೇಳುವೆನು.’’
>
> *ಹೊಶೇಯ 2:23*

> 26‘‘ಮತ್ತು ಯಾವ ಸ್ಥಳದಲ್ಲಿ ದೇವರು, ‘ನೀವು ನನ್ನ
> ಜನರಲ್ಲ’ ಎಂದು ಹೇಳಿದ್ದನೋ ಅದೇ ಸ್ಥಳದಲ್ಲಿ
> ಅವರನ್ನು ಜೀವವುಳ್ಳ ದೇವರ ಮಕ್ಕಳೆಂದು
> ಕರೆಯಲಾಗುವುದು.’’
>
> *ಹೊಶೇಯ 1;10*

---

**ಇಸಾಕನು ... ಮಗನು** ಆದಿಕಾಂಡ 21:12.

**ನಿಯಮಿತ ... ಮಗನಿರುವನು** ಆದಿಕಾಂಡ 18:10,14.

**ಹಿರಿಯವನು ... ಮಾಡುವನು** ಆದಿಕಾಂಡ 25:23.

**ನಾನು ... ದ್ವೇಷಿಸಿದೆನು** ಮಲಾಕಿ 1:2–3.

**ನಾನು ... ತೋರುವೆನು** ವಿಮೋಚನ. 33:19.

**ನಾನು ... ಮಾಡಿದೆನು** ವಿಮೋಚನ. 9:16.

27 ಇದಲ್ಲದೆ ಯೆಶಾಯನು ಇಸ್ರೇಲಿನ ಬಗ್ಗೆ ಕೂಗಿ
ಹೇಳಿದ್ದಾನೆ:

‘‘ಸಮುದ್ರ ತೀರದ ಮರಳಿನಂತೆ ಇಸ್ರೇಲರು
ಅಸಂಖ್ಯಾತವಾಗಿರುವರು. ಆದರೆ ಆ ಜನರಲ್ಲಿ ಕೆಲವರು
ಮಾತ್ರ ರಕ್ಷಣೆ ಹೊಂದುವರು. 28 ಹೌದು, ಪ್ರಭುವು
ಭೂಮಿಯ ಮೇಲಿನ ಜನರಿಗೆ ಬಹುಬೇಗನೆ ತೀರ್ಪನ್ನು
ಪೂರ್ಣವಾಗಿ ತೀರಿಸುವನು.’’

29 ಯೆಶಾಯನು ಹೇಳಿರುವುದೇನಂದರೆ:

‘‘ಪ್ರಭುವು ಸರ್ವಶಕ್ತನಾಗಿದ್ದಾನೆ. ಪ್ರಭುವು ತನ್ನ
ಜನರಲ್ಲಿ ಕೆಲವರನ್ನು ನಮಗೋಸ್ಕರವಾಗಿ ರಕ್ಷಿಸಿದ್ದಾನೆ.
ಆತನು ಹೀಗೆ ಮಾಡಿಲ್ಲದಿದ್ದರೆ, ಈಗ ನಾವು
ಸೊದೋಮಿನಂತೆಯೂ ಗೊಮೋರದಂತೆಯೂ *
ಇರುತ್ತಿದ್ದೆವು.’’

30 ಇದರರ್ಥವೇನಂದರೆ, ಯೆಹೂದ್ಯರಲ್ಲದವರು ನೀತಿ
ವಂತರಾಗಲು ಪ್ರಯತ್ನಿಸುತ್ತಿರಲಿಲ್ಲ. ಆದರೆ ಅವರನ್ನು ನೀತಿ
ವಂತರನ್ನಾಗಿ ಮಾಡಲಾಯಿತು. ಅವರು ನಂಬಿಕೆಯಿಂದಲೇ
ನೀತಿವಂತರಾದರು. 31 ಇಸ್ರೇಲಿನ ಜನರಾದರೋ ಧರ್ಮಶಾಸ್ತ್ರ
ವನ್ನು ಅನುಸರಿಸುವುದರ ಮೂಲಕ ನೀತಿವಂತರಾಗಲು
ಪ್ರಯತ್ನಿಸಿ ವಿಫಲರಾದರು. 32 ಏಕೆಂದರೆ ಕ್ರಿಯೆಗಳ ಮೂಲಕ
ನೀತಿವಂತರಾಗಲು ಅವರು ಪ್ರಯತ್ನಿಸಿದರೇ ಹೊರತು ನಂಬಿಕೆ
ಯನ್ನು ಆಧಾರ ಮಾಡಿಕೊಳ್ಳಲಿಲ್ಲ. ಜನರನ್ನು ಬೀಳಿಸುವ ಕಲ್ಲಿನ
ಮೇಲೆ ಅವರು ಬಿದ್ದರು. 33 ಪವಿತ್ರ ಗ್ರಂಥವು ಆ ಕಲ್ಲಿನ ಬಗ್ಗೆ
ಹೀಗೆ ತಿಳಿಸಿದೆ:

‘‘ಇಗೋ, ನಾನು ಸಿಯೋನಿನಲ್ಲಿ * ಜನರನ್ನು
ಬೀಳಿಸುವ ಒಂದು ಕಲ್ಲನ್ನು ಇಡುತ್ತೇನೆ. ಈ
ಬಂಡೆಯಿಂದಾಗಿ ಜನರು ಪಾಪ ಮಾಡುತ್ತಾರೆ.
ಆದರೆ ಆ ಬಂಡೆಯಲ್ಲಿ ನಂಬಿಕೆಯಿಡುವವನು
ಎಂದಿಗೂ ಆಶಾಭಂಗ ಹೊಂದುವುದಿಲ್ಲ.’’
*ಯೆಶಾಯ 8:14; 28:16*

10 ಸಹೋದರ ಸಹೋದರಿಯರೇ, ಇಸ್ರೇಲರೆಲ್ಲರೂ
ರಕ್ಷಣೆ ಹೊಂದಬೇಕೆಂಬುದೇ ನನ್ನ ಮಹಾಭಿಲಾಷೆ.
ನಾನು ದೇವರಲ್ಲಿ ಅದಕ್ಕಾಗಿ ಪ್ರಾರ್ಥಿಸುತ್ತಿದ್ದೇನೆ. 2 ನಾನು
ಯೆಹೂದ್ಯರ ಬಗ್ಗೆ ಹೀಗೆ ಹೇಳಬಲ್ಲೆನು: ಅವರು ದೇವರನ್ನು
ಹಿಂಬಾಲಿಸಲು ನಿಜವಾಗಿಯೂ ಪ್ರಯತ್ನಿಸುತ್ತಾರೆ. ಆದರೆ
ಅವರಿಗೆ ಸರಿಯಾದ ಮಾರ್ಗ ಗೊತ್ತಿಲ್ಲ. 3 ನೀತಿವಂತರನ್ನಾಗಿ
ಮಾಡುವ ದೇವರ ಮಾರ್ಗವನ್ನು ಅವರು ತಿಳಿದಿಲ್ಲದ ಕಾರಣ
ತಮ್ಮ ಸ್ವಂತ ಮಾರ್ಗದ ಮೂಲಕವಾಗಿ ತಮ್ಮನ್ನು ನೀತಿ
ವಂತರನ್ನಾಗಿ ಮಾಡಿಕೊಳ್ಳಲು ಪ್ರಯತ್ನಿಸಿದರು. 4 ತನ್ನಲ್ಲಿ
ನಂಬಿಕೆಯಿಡುವ ಪ್ರತಿಯೊಬ್ಬನು ನೀತಿನಿರ್ಣಯ ಹೊಂದ
ಬೇಕೆಂದು ಕ್ರಿಸ್ತನು ಧರ್ಮಶಾಸ್ತ್ರವನ್ನು ಕೊನೆಗೊಳಿಸಿದನು.

5 ಧರ್ಮಶಾಸ್ತ್ರದಿಂದಾಗುವ ನೀತಿಯ ಬಗ್ಗೆ, ‘‘ಧರ್ಮಶಾಸ್ತ್ರ
ವನ್ನು ಅನುಸರಿಸುವುದರ ಮೂಲಕ ಜೀವವನ್ನು ಪಡೆದು
ಕೊಳ್ಳಲು ಬಯಸುವವನು, ಧರ್ಮಶಾಸ್ತ್ರವು ಹೇಳುವ ಕಾರ್ಯ
ಗಳನ್ನು ಮಾಡಲೇಬೇಕು’’ * ಎಂದು ಮೋಶೆ ಹೇಳಿದ್ದಾನೆ.
6 ಆದರೆ ನಂಬಿಕೆಯ ಮೂಲಕ ನೀತಿನಿರ್ಣಯ ಹೊಂದುವುದರ
ಬಗ್ಗೆ, ‘‘(ಕ್ರಿಸ್ತನನ್ನು ಕೆಳಕ್ಕೆ ಕರೆದುಕೊಂಡು ಬರಲು) ‘ಯಾರು
ಪರಲೋಕಕ್ಕೆ ಏರಿಹೋಗಬಲ್ಲರು?’ ಎಂದಾಗಲಿ (ಕ್ರಿಸ್ತನನ್ನು
ಸತ್ತವರೊಳಗಿಂದ ಎಬ್ಬಿಸಿಕೊಂಡು ಬರಲು) 7 ‘ಪಾತಾಳಕ್ಕೆ
ಯಾರು ಇಳಿದುಹೋಗಬಲ್ಲರು’ ಎಂದಾಗಲಿ ಹೇಳಬೇಡ’’
ಎಂದು ಪವಿತ್ರ ಗ್ರಂಥವು ಹೇಳುತ್ತದೆ. 8 ಇದಲ್ಲದೆ, ‘‘ದೇವರ
ವಾಕ್ಯವು ನಿನ್ನ ಸಮೀಪದಲ್ಲೇ ಇದೆ. ಅದು ನಿನ್ನ ಬಾಯಲ್ಲಿಯೂ
ನಿನ್ನ ಹೃದಯದಲ್ಲಿಯೂ ಅದೆ’’ ಎಂದು ಪವಿತ್ರ ಗ್ರಂಥವು
ಹೇಳುತ್ತದೆ. ನಾವು ಜನರಿಗೆ ನಂಬಿಕೆಯ ಕುರಿತಾಗಿ ಸಾರುವ
ವಾಕ್ಯವೇ ಅದು. * 9 ‘‘ಯೇಸುವೇ ಪ್ರಭು’’ವೆಂದು ನಿನ್ನ
ಬಾಯಿಯ ಮೂಲಕ ಹೇಳುವುದಾದರೆ ಮತ್ತು ಯೇಸುವನ್ನು
ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದವನು ದೇವರೇ
ಎಂದು ನಿನ್ನ ಹೃದಯದಲ್ಲಿ ನಂಬುವುದಾದರೆ, ನೀನು ರಕ್ಷಣೆ
ಹೊಂದುವೆ. 10 ಹೌದು, ನಾವು ನಮ್ಮ ಹೃದಯಗಳಲ್ಲಿ
ನಂಬುವುದರ ಮೂಲಕ ನೀತಿವಂತರಾಗುತ್ತೇವೆ. ‘‘ನಂಬು
ತ್ತೇವೆ’’ ಎಂದು ಬಾಯಾರೆ ಹೇಳುವುದರ ಮೂಲಕ ರಕ್ಷಣೆ
ಹೊಂದುತ್ತೇವೆ. 11 ಪವಿತ್ರ ಗ್ರಂಥವು ಹೀಗೆ ಹೇಳುತ್ತದೆ:
‘‘ಆತನಲ್ಲಿ ನಂಬಿಕೆಯಿಡುವ ಯಾವ ವ್ಯಕ್ತಿಯೂ ನಾಚಿಕೆಗೆ
ಗುರಿಯಾಗುವುದೇ ಇಲ್ಲ.’’ * 12 ಏಕೆಂದರೆ ಯೆಹೂದ್ಯರಿಗೂ
ಯೆಹೂದ್ಯರಲ್ಲದವರಿಗೂ ಯಾವ ವ್ಯತ್ಯಾಸವೂ ಇಲ್ಲ. ಎಲ್ಲ
ರಿಗೂ ಒಬ್ಬನೇ ಪ್ರಭು. ತನ್ನಲ್ಲಿ ನಂಬಿಕೆಯಿಡುವ ಜನರೆಲ್ಲರಿಗೆ
ಪ್ರಭುವು ಅನೇಕ ಆಶೀರ್ವಾದಗಳನ್ನು ಕೊಡುತ್ತಾನೆ. 13 ಹೌದು,
ಪವಿತ್ರ ಗ್ರಂಥವು ಹೇಳುವಂತೆ, ‘‘ಪ್ರಭುವಿನಲ್ಲಿ ನಂಬಿಕೆಯಿಡುವ
ಪ್ರತಿಯೊಬ್ಬನು ರಕ್ಷಣೆ ಹೊಂದುವನು.’’ *

14 ಪ್ರಭುವಿನಲ್ಲಿ ನಂಬಿಕೆಯಿಲ್ಲದೆ ಆತನಲ್ಲಿ ಭರವಸವಿಡುವು
ದಾದರೂ ಹೇಗೆ? ಪ್ರಭುವಿನ ವಿಷಯವನ್ನು ಕೇಳದೆ
ಆತನಲ್ಲಿ ನಂಬಿಕೆ ಇಡುವುದಾದರೂ ಹೇಗೆ? ಮತ್ತೊಬ್ಬನು
ತಿಳಿಸದ ಹೊರತು ಪ್ರಭುವಿನ ಬಗ್ಗೆ ಕೇಳುವುದಾದರೂ ಹೇಗೆ?
15 ಬೋಧಕರನ್ನು ಕಳುಹಿಸದ ಹೊರತು ಜನರಿಗೆ ತಿಳಿಸುವು
ದಾದರೂ ಹೇಗೆ? ಆದ್ದರಿಂದಲೇ, ‘‘ಸುವಾರ್ತಿಕರ ಪಾದಗಳು
ಸುಂದರವಾಗಿವೆ’’ * ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.

16 ಆದರೆ ಯೆಹೂದ್ಯರೆಲ್ಲರೂ ಆ ಸುವಾರ್ತೆಯನ್ನು
ಸ್ವೀಕರಿಸಿಕೊಳ್ಳಲಿಲ್ಲ. ‘‘ಪ್ರಭುವೇ, ನಾವು ಅವರಿಗೆ ಹೇಳಿದ

---

**ಸೊದೊಮ್ ಗೊಮೋರ** ದುಷ್ಟ ಜನರು ವಾಸವಾಗಿದ್ದ ನಗರಗಳು. ದೇವರು ಅವುಗಳನ್ನು ನಾಶಮಾಡುವುದರ ಮೂಲಕ ಜನರನ್ನು ದಂಡಿಸಿದನು.

**ಸಿಯೋನ್** ದೇವಮಕ್ಕಳ ಪಟ್ಟಣವಾದ ಜೆರುಸಲೇಮಿನ ಮತ್ತೊಂದು ಹೆಸರು.

**ಧರ್ಮಶಾಸ್ತ್ರ... ಮಾಡಲೇಬೇಕು** ಯಾಜಕ. 18:5

**ವಚನ 6-8** ಧರ್ಮೋಪದೇಶ. 30:12-14.

**ಆತನಲ್ಲಿ... ಗುರಿಯಾಗುವುದೇ ಇಲ್ಲ** ಯೆಶಾಯ 28:16.

**ಪ್ರಭುವಿನಲ್ಲಿ... ಹೊಂದುವನು** ಯೋವೇಲ 2:32..

**ಸುವಾರ್ತಿಕರ ... ಸುಂದರವಾಗಿವೆ** ಯೆಶಾಯ 52:7.

ಸಂಗತಿಗಳನ್ನು ಯಾರು ನಂಬಿದರು?'' * ಎಂದು ಯೆಶಾಯ
ಹೇಳಿದ್ದಾನೆ. 17ಹೀಗಿರಲು, ಸುವಾರ್ತೆಯನ್ನು ಕೇಳುವುದರ
ಮೂಲಕ ನಂಬಿಕೆ ಬರುತ್ತದೆ. ಕ್ರಿಸ್ತನ ಬಗ್ಗೆ ಹೇಳುವುದರ
ಮೂಲಕ ಸುವಾರ್ತೆ ಪ್ರಕಟವಾಗುತ್ತದೆ.

18ಆದರೆ, ''ಜನರು ಸುವಾರ್ತೆಯನ್ನು ಕೇಳಲಿಲ್ಲವೇ?''
ಎಂದು ನಾನು ಪ್ರಶ್ನಿಸುತ್ತೇನೆ. ಹೌದು, ಪವಿತ್ರ ಗ್ರಂಥ ಹೇಳು
ವಂತೆ ಅವರು ಕೇಳಿದರು:

> ''ಅವರ ಸ್ವರಗಳು ಲೋಕದಲ್ಲೆಲ್ಲಾ ಪ್ರಸಾರ
> ಗೊಂಡವು. ಅವರ ಮಾತುಗಳು ಪ್ರಪಂಚದ ಎಲ್ಲಾ
> ಕಡೆಗಳಿಗೂ ಹೋದವು.''
>
> *ಕೀರ್ತನೆ 19:4*

19''ಇಸ್ರೇಲಿನ ಜನರು ಅರ್ಥಮಾಡಿಕೊಳ್ಳಲಿಲ್ಲವೇ?'' ಎಂದು
ನಾನು ಮತ್ತೆ ಕೇಳುತ್ತೇನೆ. ಹೌದು, ಅವರು ಅರ್ಥಮಾಡಿ
ಕೊಂಡರು. ಮೊದಲನೆಯದಾಗಿ, ದೇವರು ಮೋಶೆಯ
ಮೂಲಕ ಹೀಗೆ ತಿಳಿಸಿದ್ದಾನೆ:

> ''ಜನಾಂಗವೆನಿಸಿಕೊಳ್ಳದವರ ಮೂಲಕ ನಾನು
> ನಿಮ್ಮಲ್ಲಿ ಅಸೂಯೆ ಹುಟ್ಟಿಸುವೆನು. ಬುದ್ಧಿಹೀನ
> ರೆನಿಸಿಕೊಂಡ ಜನಾಂಗದ ಮೂಲಕ ನಾನು
> ನಿಮ್ಮನ್ನು ಸಿಟ್ಟಿಗೆಬ್ಬಿಸುವೆನು.''
>
> *ಧರ್ಮೋಪದೇಶಕಾಂಡ 32:21*

20ಬಳಿಕ ಯೆಶಾಯನು ದೇವರ ಈ ನುಡಿಯನ್ನು ಧೈರ್ಯವಾಗಿ
ಹೇಳಿದ್ದಾನೆ:

> ''ನನ್ನನ್ನು ಹುಡುಕದೆ ಇದ್ದ ಜನರು ನನ್ನನ್ನು ಕಂಡು
> ಕೊಂಡರು. ನನಗಾಗಿ ಕೇಳಿಕೊಳ್ಳದ ಜನರಿಗೆ
> ನನ್ನನ್ನು ತೋರ್ಪಡಿಸಿಕೊಂಡೆನು.''
>
> *ಯೆಶಾಯ 65:1*

21ದೇವರು ಯೆಹೂದ್ಯರಲ್ಲದ ಜನರ ಬಗ್ಗೆ ಯೆಶಾಯನ
ಮೂಲಕ ಹೀಗೆ ಹೇಳಿಸಿದನು. ಆದರೆ ಯೆಹೂದ್ಯರ ಬಗ್ಗೆ
ದೇವರು, ''ನಾನು ಆ ಜನರಿಗಾಗಿ ದಿನವೆಲ್ಲಾ ಕಾದುಕೊಂಡಿ
ದ್ದೆನು, ಆದರೆ ಅವರು ವಿಧೇಯರಾಗಲಿಲ್ಲ; ನನ್ನನ್ನು ಹಿಂಬಾಲಿ
ಸಲಿಲ್ಲ'' * ಎನ್ನುತ್ತಾನೆ.

### ದೇವರು ತನ್ನ ಜನರನ್ನು ಮರೆತಿಲ್ಲ

11 ಹಾಗಾದರೆ, ''ದೇವರು ತನ್ನ ಜನರನ್ನು ತಿರಸ್ಕರಿಸಿ
ದನೇ?'' ಎಂದು ನಾನು ಕೇಳುತ್ತೇನೆ. ಇಲ್ಲ! ನಾನೂ
ಒಬ್ಬ ಇಸ್ರೇಲನಾಗಿದ್ದೇನೆ. ನಾನು ಅಬ್ರಹಾಮನ ಕುಟುಂಬಕ್ಕೆ
ಸೇರಿದವನಾಗಿದ್ದೇನೆ: ಬೆನ್ಯಾಮೀನನ ಕುಲದವನಾಗಿದ್ದೇನೆ.
2ಇಸ್ರೇಲರು ಹುಟ್ಟುವುದಕ್ಕಿಂತ ಮೊದಲೇ ದೇವರು ಅವರನ್ನು
ತನ್ನ ಜನರನ್ನಾಗಿ ಆರಿಸಿಕೊಂಡನು. ಆತನು ಅವರನ್ನು ಹೊರಕ್ಕೆ
ತಳ್ಳಿಬಿಡಲಿಲ್ಲ. ಎಲೀಯನ ಬಗ್ಗೆ ಪವಿತ್ರ ಗ್ರಂಥವು ಏನು
ಹೇಳುತ್ತದೆ ಎಂಬುದು ನಿಮಗೆ ಖಂಡಿತವಾಗಿ ತಿಳಿದಿದೆ.
ಇಸ್ರೇಲಿನ ಜನರ ವಿರೋಧವಾಗಿ ಎಲೀಯನು ದೇವರಿಗೆ
ಮಾಡಿದ ಪ್ರಾರ್ಥನೆಯ ಬಗ್ಗೆ ಪವಿತ್ರ ಗ್ರಂಥದಲ್ಲಿ ಬರೆದಿದೆ.
3ಎಲೀಯನು, ''ಪ್ರಭುವೇ, ಜನರು ನಿನ್ನ ಪ್ರವಾದಿಗಳನ್ನು
ಕೊಂದುಹಾಕಿದರು; ನಿನ್ನ ಯಜ್ಞವೇದಿಕೆಗಳನ್ನು ನಾಶ
ಮಾಡಿದರು. ಪ್ರವಾದಿಗಳಲ್ಲಿ ನಾನೊಬ್ಬನು ಮಾತ್ರ ಇನ್ನೂ
ಬದುಕಿದ್ದೇನೆ. ಈಗ ಜನರು ನನ್ನನ್ನೂ ಕೊಲ್ಲಲು ಪ್ರಯತ್ನಿಸು
ತ್ತಿದ್ದಾರೆ'' * ಎಂದು ಪ್ರಾರ್ಥಿಸಿದನು. 4ಆದರೆ ದೇವರು
ಎಲೀಯನಿಗೆ ಕೊಟ್ಟ ಉತ್ತರವೇನು? ದೇವರು ಎಲೀಯನಿಗೆ,
''ಇನ್ನೂ ನನ್ನನ್ನು ಆರಾಧಿಸುತ್ತಿರುವ ಏಳು ಸಾವಿರ ಮಂದಿಯನ್ನು
ನನಗಾಗಿ ಉಳಿಸಿಕೊಂಡಿದ್ದೇನೆ. ಅವರನ್ನು ಬಾಳನ ಪೂಜೆಗೆ
ಕೊಟ್ಟಿಲ್ಲ'' * ಎಂದು ಉತ್ತರಕೊಟ್ಟನು. 5ಈಗಲೂ ಅದ
ರಂತೆಯೇ ಆಗಿದೆ. ದೇವರು ತನ್ನ ಕೃಪೆಯ ಮೂಲಕ ಆರಿಸಿ
ಕೊಂಡಿರುವ ಕೆಲವು ಜನರು ಇದ್ದಾರೆ, 6ದೇವರ ಕೃಪೆಯ
ಮೂಲಕ ಆರಿಸಲ್ಪಟ್ಟಿರುವ ಅವರು ದೇವರ ಮಕ್ಕಳಾದದ್ದು ತಮ್ಮ
ಕ್ರಿಯೆಗಳಿಂದಲ್ಲ. ಇಲ್ಲದಿದ್ದರೆ, ದೇವರ ಕೃಪಾವರವು ಕೃಪಾವರ
ವೆನಿಸಿಕೊಳ್ಳುತ್ತಿರಲಿಲ್ಲ.

7ಆದ್ದರಿಂದ ನಡೆದ ಸಂಗತಿಯಿಷ್ಟೇ: ಇಸ್ರೇಲಿನ ಜನರು
ನೀತಿವಂತರಾಗಲು ಪ್ರಯತ್ನಿಸಿದರು. ಆದರೆ ಅವರಿಂದ ಸಾಧ್ಯ
ವಾಗಲಿಲ್ಲ. ಹೀಗಿರಲು, ದೇವರಿಂದ ಆರಿಸಲ್ಪಟ್ಟಿದ್ದ ಜನರು
ನೀತಿವಂತರಾದರು. ಆದರೆ ಉಳಿದ ಜನರು ಕಠಿಣರಾಗಿ
ದೇವರಿಗೆ ಕಿವಿಗೊಡಲಿಲ್ಲ. 8ಪವಿತ್ರ ಗ್ರಂಥದಲ್ಲಿ ಬರೆದಿರು
ವಂತೆಯೇ ಇದಾಯಿತು:

> ''ಜನರಿಗೆ ಅರ್ಥವಾಗದಂತೆ ದೇವರು ಅವರನ್ನು
> ಮಂಕುಗೊಳಿಸಿದನು.'' *ಯೆಶಾಯ 29:10*

> ''ಅವರು ಇಂದಿನವರೆಗೂ ಕಣ್ಣಿದ್ದರೂ ಕಾಣದಂತೆ
> ಕಿವಿಯಿದ್ದರೂ ಕೇಳದಂತೆ ದೇವರು ಅವುಗಳನ್ನು
> ಮುಚ್ಚಿಬಿಟ್ಟನು.''
>
> *ಧರ್ಮೋಪದೇಶಕಾಂಡ 29:4*

9ದಾವೀದನು ಇಂತೆನ್ನುತ್ತಾನೆ:

> ''ಅವರು ತಮ್ಮ ಔತಣಗಳಲ್ಲಿ ಸಿಕ್ಕಿಕೊಂಡು
> ಬಂಧಿತರಾಗಲಿ; ಎಡವಿಬಿದ್ದು ದಂಡನೆ
> ಹೊಂದಲಿ.
> 10 ಅವರ ಕಣ್ಣು ಕುರುಡಾಗಲಿ; ನಿರಂತರ
> ಭಾರದಿಂದ ಬೆನ್ನು ಗೂನಾಗಲಿ.''
>
> *ಕೀರ್ತನೆ 69:22-23*

11ಹಾಗಾದರೆ, ಯೆಹೂದ್ಯರು ಮೇಲೇಳದಂತೆ ಮುಗ್ಗರಿಸಿ
ಬಿದ್ದರೇನು? ಎಂದಿಗೂ ಇಲ್ಲ. ಆದರೆ ಅವರ ಅಪರಾಧದ
ನಿಮಿತ್ತ ಯೆಹೂದ್ಯರಲ್ಲದವರಿಗೆ ರಕ್ಷಣೆ ಲಭಿಸುವಂತಾಯಿತು.

---

**ಪ್ರಭುವೇ ... ನಂಬಿದರು?** ಯೆಶಾಯ 53:1.

**ನಾನು ... ಹಿಂಬಾಲಿಸಲಿಲ್ಲ** ಯೆಶಾಯ 65:2.

**ಪ್ರಭುವೇ... ಪ್ರಯತ್ನಿಸುತ್ತಿದ್ದಾರೆ** 1ಅರಸುಗಳು 19:10,14.

**ಇನ್ನೂ ... ಕೊಟ್ಟಿಲ್ಲ** 1 ಅರಸುಗಳು 19;18.

ಹೀಗೆ ಇತರರನ್ನು ನೋಡಿ ಅವರೇ ಅಸೂಯೆಪಡು
ವಂತಾಯಿತು. 12ಯೆಹೂದ್ಯರ ಅಪರಾಧವು ಜಗತ್ತಿಗೆ ಅಧಿಕ
ವಾದ ಆಶೀರ್ವಾದಗಳನ್ನೂ ಅವರ ಅಪಜಯವು ಯೆಹೂದ್ಯ
ರಲ್ಲದ ಜನರಿಗೆ ಅಧಿಕವಾದ ಆಶೀರ್ವಾದಗಳನ್ನೂ ತರಲು
ಕಾರಣವಾದರೆ, ದೇವರ ಇಚ್ಛೆಗನುಸಾರವಾಗಿ ಯೆಹೂದ್ಯ
ರೆಲ್ಲರು ಪರಿವರ್ತನೆ ಹೊಂದಿದಾಗ ಜಗತ್ತು ಮತ್ತಷ್ಟು ಅಗಾಧ
ವಾದ ಆಶೀರ್ವಾದಗಳನ್ನು ಹೊಂದುವುದು ನಿಶ್ಚಯವಲ್ಲವೇ?

13ಈಗ ನಾನು ಯೆಹೂದ್ಯರಲ್ಲದ ಜನರೊಂದಿಗೆ
ಮಾತಾಡುತ್ತಿದ್ದೇನೆ. ನಾನು ಅವರಿಗೆ ಅಪೊಸ್ತಲನಾಗಿದ್ದೇನೆ.
ಆದ್ದರಿಂದ ನಾನು ಈ ಕೆಲಸವನ್ನು ನನ್ನಿಂದ ಸಾಧ್ಯವಾದಷ್ಟು
ಉತ್ತಮವಾಗಿಯೇ ಮಾಡುತ್ತೇನೆ. 14ನಾನು ನನ್ನ ಸ್ವಂತ
ಜನರಲ್ಲಿ (ಯೆಹೂದ್ಯರಲ್ಲಿ) ಅಸೂಯೆಯನ್ನು ಉಂಟುಮಾಡಿ
ಅವರಲ್ಲಿ ಕೆಲವರಾದರೂ ರಕ್ಷಣೆ ಹೊಂದುವಂತೆ ಮಾಡ
ಬಲ್ಲೆನೆಂಬ ನಿರೀಕ್ಷೆ ನನಗಿದೆ. 15ಇಸ್ರೇಲರು ತಿರಸ್ಕೃತರಾದ್ದರಿಂದ
ಜಗತ್ತು ದೇವರೊಡನೆ ಸಂಧಾನವಾಗಲು ಸಾಧ್ಯವಾಯಿತಾದರೆ
ಅವರು ಸ್ವೀಕೃತರಾದಾಗ ಇನ್ನೇನು ತಾನೆ ಸಂಭವಿಸದು! ಸತ್ತವರು
ಜೀವ ಪಡೆದುಕೊಂಡಂತಾಗುವುದಿಲ್ಲವೇ?

16ರೊಟ್ಟಿಯ ಮೊದಲನೇ ತುಂಡನ್ನು ದೇವರಿಗೆ ಅರ್ಪಿಸಿ
ದಾಗ, ಇಡೀ ರೊಟ್ಟಿಯೇ ಪವಿತ್ರವಾಯಿತು. ಮರದ
ಬೇರುಗಳು ಪವಿತ್ರವಾಗಿದ್ದರೆ, ಆ ಮರದ ಕೊಂಬೆಗಳು ಸಹ
ಪವಿತ್ರವಾಗಿವೆ.

17ಆಲಿವ್ ಮರದ ಕೆಲವು ಕೊಂಬೆಗಳು ಮುರಿಯ
ಲ್ಪಟ್ಟಾಗ, ಕಾಡು ಆಲಿವ್ ಮರದ ಕೊಂಬೆಯೊಂದು ಮೊದಲಿನ
ಆಲಿವ್ ಮರಕ್ಕೆ ಸೇರಿಕೊಂಡಂತಿದೆ ಇದು. ಯೆಹೂದ್ಯರಲ್ಲದ
ನೀವು ಕಾಡು ಕೊಂಬೆಗೆ ಸಮಾನವಾಗಿದ್ದೀರಿ. ಆದರೆ ಈಗ ನೀವು
ಮೊದಲನೆ ಮರದ (ಯೆಹೂದ್ಯರ) ಶಕ್ತಿಯಲ್ಲಿಯೂ
ಜೀವದಲ್ಲಿಯೂ ಪಾಲುಗಾರರಾಗಿದ್ದೀರಿ. 18ಆದ್ದರಿಂದ
ಮುರಿಯಲ್ಪಟ್ಟ ಆ ಕೊಂಬೆಗಳನ್ನು ಕಡೆಗಣಿಸಬೇಡ. ಅವು
ಗಳನ್ನು ಕಡೆಗಣಿಸಲು ನಿನಗೆ ಯಾವ ಕಾರಣವೂ ಇಲ್ಲ.
ಏಕೆಂದರೆ, ನೀನು ಬೇರಿಗೆ ಜೀವವನ್ನು ಕೊಡುವುದಿಲ್ಲ. ಬೇರು
ನಿನಗೆ ಜೀವವನ್ನು ಕೊಡುತ್ತದೆ. 19“ನಾವು ಆ ಮರದ ಕೊಂಬೆ
ಗಳಿಗೆ ಸೇರಿಕೊಳ್ಳಬೇಕೆಂದು ಆ ಕೊಂಬೆಗಳು ಮುರಿಯ
ಲ್ಪಟ್ಟವು” ಎಂದು ನೀನು ಹೇಳಬಹುದು. 20ಅದು ಸತ್ಯ. ಆ
ಕೊಂಬೆಗಳು ಮುರಿಯಲ್ಪಟ್ಟವು. ಅದಕ್ಕೆ ಅಪನಂಬಿಕೆಯೇ
ಕಾರಣ. ನೀನು ಆ ಮರದ ಒಂದು ಭಾಗವಾದದ್ದು ನಿನ್ನ ನಂಬಿಕೆ
ಯಿಂದಲೇ. ಆದ್ದರಿಂದ ಗರ್ವಪಡಬೇಡ, ಭಯದಿಂದಿರು.
21ದೇವರು ಸಹಜವಾದ ಕೊಂಬೆಗಳನ್ನೇ ಉಳಿಸಿಲ್ಲದಿರುವುದ
ರಿಂದ ನೀನು ನಂಬದಿದ್ದರೆ ಆತನು ನಿನ್ನನ್ನು ಉಳಿಸುವುದಿಲ್ಲ.

22ಆದ್ದರಿಂದ ದೇವರು ದಯೆ ಉಳ್ಳವನಾಗಿದ್ದರೂ ಬಹು
ಕಠಿಣನೂ ಆಗಿದ್ದಾನೆ ಎಂಬುದನ್ನು ಗಮನಿಸು. ದೇವರು ತನ್ನನ್ನು
ಹಿಂಬಾಲಿಸದಿರುವ ಜನರನ್ನು ದಂಡಿಸುತ್ತಾನೆ. ಆದರೆ ನೀನು
ದೇವರ ದಯೆಯನ್ನು ಆಶ್ರಯಿಸಿಕೊಂಡಿದ್ದರೆ, ದೇವರು ನಿನಗೆ
ದಯಾಳುವಾಗಿರುತ್ತಾನೆ. ಇಲ್ಲವಾದರೆ, ನಿನ್ನನ್ನು ಮರದಿಂದ
ಕಡಿದುಹಾಕಲಾಗುವುದು. 23ಯೆಹೂದ್ಯರು ತಮ್ಮ ಅಪನಂಬಿಕೆ
ಯನ್ನು ಬಿಡುವುದಾದರೆ, ದೇವರು ಅವರನ್ನು ಮತ್ತೆ ಸ್ವೀಕರಿಸಿ
ಕೊಳ್ಳುವನು. ಅವರ ಮೊದಲಿನ ಸ್ಥಾನವನ್ನು ಅವರಿಗೆ ಕೊಡಲು
ದೇವರು ಶಕ್ತನಾಗಿದ್ದಾನೆ. 24ಕಾಡುಕೊಂಬೆಯೊಂದು ಒಳ್ಳೆಯ
ಮರದ ಕೊಂಬೆಯಾಗುವುದು ಸಹಜವಾದದ್ದಲ್ಲ. ಆದರೆ
ಯೆಹೂದ್ಯರಲ್ಲದ ನೀವು ಕಾಡು ಆಲಿವ್ ಮರದಿಂದ ಕತ್ತರಿ
ಸಲ್ಪಟ್ಟ ಕೊಂಬೆಯಾಗಿದ್ದು ಒಳ್ಳೆಯ ಆಲಿವ್ ಮರಕ್ಕೆ ಕಸಿ
ಕಟ್ಟಲ್ಪಟ್ಟೀದ್ದಿರಿ. ಯೆಹೂದ್ಯರಾದರೋ ಒಳ್ಳೆಯ ಆಲಿವ್
ಮರದಲ್ಲಿ ಬೆಳೆದ ರೆಂಬೆಗಳು. ಆದ್ದರಿಂದ ಅವರು ತಮ್ಮ ಸ್ವಂತ
ಮರಕ್ಕೆ ಮತ್ತೆ ಸೇರಿಸಲ್ಪಡಲು ಖಂಡಿತವಾಗಿಯೂ ಸಾಧ್ಯ.

25ಸಹೋದರ ಸಹೋದರಿಯರೇ, ನಿಮ್ಮನ್ನು ನೀವೇ
ಬುದ್ಧಿವಂತರೆಂದು ಎಣಿಸಿಕೊಳ್ಳದಂತೆ ಇದುವರೆಗೆ ರಹಸ್ಯವಾದ
ಸಂಗತಿಯನ್ನು ನಿಮಗೆ ತಿಳಿಸುತ್ತೇನೆ. ಅದೇನಂದರೆ: ಇಸ್ರೇಲಿನ
ಜನರಲ್ಲಿ ಒಂದು ಪಾಲು ಮಂದಿ ಮೊಂಡರಾದರು. ಆದರೆ
ಯೆಹೂದ್ಯರಲ್ಲದ ಜನರೆಲ್ಲರೂ ದೇವರ ಬಳಿಗೆ ಬಂದಾಗ ಅವರ
ಮೊಂಡತನವು ಇಲ್ಲವಾಗುವುದು. 26ಹೀಗೆ ಎಲ್ಲಾ ಇಸ್ರೇಲರು
ರಕ್ಷಣೆ ಹೊಂದುವರು. ಪವಿತ್ರ ಗ್ರಂಥದಲ್ಲಿ ಹೀಗೆ ಬರೆಯ
ಲ್ಪಟ್ಟಿದೆ:

“ಸಿಯೋನಿನಿಂದ ರಕ್ಷಕನು ಬರುವನು: ಆತನು
ಯಾಕೋಬನ ಕುಟುಂಬದಿಂದ ಎಲ್ಲಾ ದುಷ್ಟ
ತನವನ್ನು ನಿವಾರಣೆ ಮಾಡುವನು.
27 ನಾನು ಆ ಜನರ ಪಾಪಗಳನ್ನು ಪರಿಹರಿಸುವಾಗ
ಅವರೊಂದಿಗೆ ಈ ಒಪ್ಪಂದವನ್ನು ಮಾಡಿ
ಕೊಳ್ಳುವೆನು.”

*ಯೆಶಾಯ 59:20-21; 27:9*

28ಯೆಹೂದ್ಯರು ಸುವಾರ್ತೆಯನ್ನು ಸ್ವೀಕರಿಸಿಕೊಳ್ಳಲಿಲ್ಲ.
ಆದ್ದರಿಂದ ಅವರು ದೇವರ ಶತ್ರುಗಳಾಗಿದ್ದಾರೆ. ಯೆಹೂದ್ಯ
ರಲ್ಲದ ಜನರಿಗೆ ಸಹಾಯವಾಗಲೆಂದೇ ಇದಾಯಿತು. ಆದರೆ
ಯೆಹೂದ್ಯರು ಇನ್ನೂ ದೇವರಿಂದ ಆರಿಸಲ್ಪಟ್ಟ ಜನರಾಗಿದ್ದಾರೆ.
ಆದ್ದರಿಂದ ಆತನು ಅವರ ಪಿತೃಗಳೊಂದಿಗೆ ತಾನು ಮಾಡಿಕೊಂಡ
ಒಡಂಬಡಿಕೆ ನಿಮಿತ್ತ ಅವರನ್ನು ಪ್ರೀತಿಸುತ್ತಾನೆ. 29ಆತನು,
ತಾನು ಕರೆಯುವ ಜನರ ವಿಷಯವಾಗಿಯೂ ತಾನು ಅವರಿಗೆ
ಕೊಡುವ ವರಗಳ ವಿಷಯವಾಗಿಯೂ ತನ್ನ ಮನಸ್ಸನ್ನು ಬದಲಾ
ಯಿಸುವುದೇ ಇಲ್ಲ; ತಾನು ಜನರಿಗೆ ನೀಡಿದ ಕರೆಯನ್ನು
ಹಿಂತೆಗೆದುಕೊಳ್ಳುವುದೇ ಇಲ್ಲ. 30ಒಂದು ಕಾಲದಲ್ಲಿ ನೀವು
ಆತನಿಗೆ ವಿಧೇಯರಾಗಿರಲಿಲ್ಲ. ಈಗಲಾದರೊ ನೀವು ಕರುಣೆ
ಯನ್ನು ಹೊಂದಿಕೊಂಡಿರಿ. ಏಕೆಂದರೆ ಅವರು (ಯೆಹೂದ್ಯರು)
ಆತನಿಗೆ ಅವಿಧೇಯರಾದರು. 31ದೇವರು ನಿಮಗೆ ಕರುಣೆ
ತೋರಿದ್ದರಿಂದ ಈಗ ಯೆಹೂದ್ಯರು ವಿಧೇಯರಾಗುವುದಿಲ್ಲ.
ಆದರೆ ಅವರು ಸಹ ದೇವರಿಂದ ಕರುಣೆಯನ್ನು ಹೊಂದಿಕೊಳ್ಳ
ಲೆಂದು ಹೀಗಾಯಿತು. 32ಎಲ್ಲರೂ ದೇವರಿಗೆ ಅವಿಧೇಯ
ರಾದರು. ದೇವರು ಎಲ್ಲರಿಗೂ ಕರುಣೆಯನ್ನು ತೋರ
ಬೇಕೆಂದು ಎಲ್ಲರನ್ನೂ ಒಟ್ಟಾಗಿ ಅವಿಧೇಯತ್ವದಿಂದ
ಬಂಧಿಸಿದ್ದಾನೆ.

## ದೇವರಿಗೆ ಸ್ತೋತ್ರವಾಗಲಿ

33ಹೌದು, ದೇವರ ಐಶ್ವರ್ಯವು ಎಷ್ಟೋ ಅಪಾರವಾಗಿದೆ!
ದೇವರ ವಿವೇಕಕ್ಕೂ ಜ್ಞಾನಕ್ಕೂ ಕೊನೆಯೇ ಇಲ್ಲ! ದೇವರು

ನಿರ್ಧರಿಸುವ ಸಂಗತಿಗಳನ್ನು ಯಾವನೂ ವಿವರಿಸಲಾರನು.
ದೇವರ ಮಾರ್ಗಗಳನ್ನು ಯಾವನೂ ಅರ್ಥಮಾಡಿಕೊಳ್ಳ
ಲಾರನು. 34ಪವಿತ್ರ ಗ್ರಂಥ ಹೇಳುವಂತೆ:

> ‘‘ಪ್ರಭುವಿನ ಮನಸ್ಸನ್ನು ಯಾರು ಬಲ್ಲರು? ದೇವ
> ರಿಗೆ ಸಲಹೆಯನ್ನು ಯಾರು ಕೊಡಬಲ್ಲರು?’’
> *ಯೆಶಾಯ 40:13*

> 35‘‘ಮೊದಲು ದೇವರಿಗೆ ಕೊಟ್ಟು ಪ್ರತಿಫಲ ಪಡೆದವ
> ರ್ಯಾರು? ದೇವರು ಯಾರಿಗೂ ಸಾಲಗಾರ
> ನಾಗಿಲ್ಲ.’’ *ಯೋಬ 41:11*

36ಹೌದು, ದೇವರು ಸಮಸ್ತವನ್ನು ಸೃಷ್ಟಿಸಿದನು. ಸಮಸ್ತವು
ದೇವರ ಮೂಲಕವಾಗಿಯೂ ದೇವರಿಗಾಗಿಯೂ ಮುಂದುವರಿ
ಯುತ್ತಿದೆ. ದೇವರಿಗೆ ಸದಾಕಾಲವೂ ಸ್ತೋತ್ರ! ಆಮೆನ್.

### ನಿಮ್ಮ ಜೀವಿತಗಳನ್ನು ದೇವರಿಗೆ ಕೊಡಿರಿ

12 ಆದುದರಿಂದ ಸಹೋದರ ಸಹೋದರಿಯರೇ,
ದೇವರ ಮಹಾ ಕನಿಕರವನ್ನು ನಿಮ್ಮ ನೆನಪಿಗೆ ತಂದು
ನಿಮ್ಮನ್ನು ಬೇಡಿಕೊಳ್ಳುವುದೇನಂದರೆ, ನಿಮ್ಮನ್ನೇ ದೇವರಿಗೆ
ಮೀಸಲಾದ, ಮೆಚ್ಚುಗೆಯಾದ ಸಜೀವ ಯಜ್ಞಗಳಾಗಿ ಅರ್ಪಿಸಿರಿ.
ಇದೇ ನೀವು ಸಲ್ಲಿಸಬೇಕಾದ ನಿಜವಾದ ಆರಾಧನೆ. 2ಈ
ಲೋಕದವರ ನಡವಳಿಕೆಯನ್ನು ಅನುಸರಿಸದೆ ಅಂತರಂಗದಲ್ಲಿ
ಮಾರ್ಪಾಟನ್ನು ಹೊಂದಿದವರಾಗಿದ್ದು ಪರಲೋಕ ಭಾವದವ
ರಾಗಿರಿ. ಆಗ ನೀವು ದೇವರ ಚಿತ್ತಾನುಸಾರ ಯಾವುದು ಉತ್ತಮ
ವಾದುದು, ಯಾವುದು ಮೆಚ್ಚಿಕೆಯಾದುದು ಯಾವುದು ಉತ್ಕೃಷ್ಟ
ವಾದುದು ಎಂಬುದನ್ನು ಅರಿತುಕೊಳ್ಳುವಿರಿ.

3ದೇವರು ನನಗೆ ವಿಶೇಷವಾದ ಒಂದು ವರವನ್ನು ಕೊಟ್ಟಿ
ದ್ದಾನೆ. ಆದಕಾರಣವೇ, ನಿಮ್ಮಲ್ಲಿರುವ ಪ್ರತಿಯೊಬ್ಬರಿಗೂ ಈ
ಸಂಗತಿಗಳನ್ನು ತಿಳಿಸುತ್ತಿದ್ದೇನೆ. ನೀವು ನಿಮ್ಮ ನಿಜವಾದ
ಯೋಗ್ಯತೆಗಿಂತಲೂ ಹೆಚ್ಚಾಗಿ ನಿಮ್ಮ ವಿಷಯದಲ್ಲಿ ಭಾವಿಸಿ
ಕೊಳ್ಳಬೇಡಿ. ನೀವು ನಿಮ್ಮ ವಿಷಯದಲ್ಲಿ ಏನು ಭಾವಿಸಿ
ಕೊಂಡರೂ ಆ ಭಾವನೆಯು ನಿಮ್ಮ ನಿಜವಾದ ಯೋಗ್ಯತೆಗೆ
ಸರಿಸಮಾನವಾಗಿರಬೇಕು. ದೇವರು ನಿಮಗೆ ಎಂಥ ನಂಬಿಕೆ
ಯನ್ನು ಕೊಟ್ಟಿದ್ದಾನೊ ಆ ನಂಬಿಕೆಗೆ ತಕ್ಕಂತೆ ನಿಮ್ಮ ವಿಷಯದಲ್ಲಿ
ಭಾವಿಸಿಕೊಳ್ಳಿರಿ. 4ಪ್ರತಿಯೊಬ್ಬರಿಗೂ ಒಂದು ದೇಹವಿದೆ. ಆ
ದೇಹಕ್ಕೆ ಅನೇಕ ಅಂಗಾಂಗಗಳಿವೆ. ಆ ಅಂಗಾಂಗಗಳು ಒಂದೇ
ಕಾರ್ಯವನ್ನು ಮಾಡುವುದಿಲ್ಲ. 5ಹೀಗೆ ನಮ್ಮಲ್ಲಿ ಅನೇಕ
ರಿದ್ದರೂ ಕ್ರಿಸ್ತನಲ್ಲಿ ನಾವೆಲ್ಲರೂ ಒಂದೇ ದೇಹವಾಗಿದ್ದೇವೆ.
ನಾವು ಆ ದೇಹದ ಅಂಗಗಳಾಗಿದ್ದೇವೆ. ಆ ದೇಹದ
ಪ್ರತಿಯೊಂದು ಅಂಗವು ಇತರ ಅಂಗಗಳಿಗೂ ಸೇರಿಕೊಂಡಿದೆ.
6ನಾವೆಲ್ಲರೂ ಬೇರೆ ಬೇರೆ ವರಗಳನ್ನು ಹೊಂದಿದ್ದೇವೆ. ದೇವರು
ನಮಗೆ ಕೊಟ್ಟಿರುವ ಕೃಪೆಯಿಂದಲೇ ಪ್ರತಿಯೊಂದು ವರವು
ಬಂದಿದೆ. ಪ್ರವಾದಿಸುವ ವರವನ್ನು ಹೊಂದಿರುವವನು ತನ
ಗಿರುವ ನಂಬಿಕೆಯೊಂದಿಗೆ ಆ ವರವನ್ನು ಉಪಯೋಗಿಸಬೇಕು.
7ಸೇವೆಮಾಡುವ ವರವನ್ನು ಹೊಂದಿರುವವನು ಸೇವೆಮಾಡ
ಬೇಕು. 8ಉಪದೇಶ ಮಾಡುವ ವರವನ್ನು ಹೊಂದಿರುವವನು
ಉಪದೇಶ ಮಾಡಬೇಕು. ಸಂತೈಸುವ ವರವನ್ನು ಹೊಂದಿರು
ವವನು ಬೇರೆಯವರನ್ನು ಸಂತೈಸಬೇಕು. ದಾನಮಾಡುವ
ವರವನ್ನು ಹೊಂದಿರುವವನು ಉದಾರವಾಗಿ ಕೊಡಬೇಕು.
ನಾಯಕತ್ವದ ವರವನ್ನು ಹೊಂದಿರುವವನು ನಾಯಕತ್ವವನ್ನು
ವಹಿಸಿಕೊಂಡಿರುವಾಗ ಕಷ್ಟಪಟ್ಟು ದುಡಿಯಬೇಕು. ಕನಿಕರ
ವನ್ನು ತೋರುವ ವರವನ್ನು ಹೊಂದಿರುವವನು ಆನಂದದಿಂದ
ಆ ಕಾರ್ಯವನ್ನು ಮಾಡಬೇಕು.

9ನಿಮ್ಮ ಪ್ರೀತಿಯು ಯಥಾರ್ಥವಾಗಿರಲಿ. ದುಷ್ಟ ಕಾರ್ಯ
ಗಳನ್ನು ದ್ವೇಷಿಸಿರಿ. ಒಳ್ಳೆಯ ಕಾರ್ಯಗಳನ್ನು ಮಾತ್ರ ಮಾಡಿರಿ.
10ಸಹೋದರ ಸಹೋದರಿಯರೆಂಬ ಅನ್ಯೋನ್ಯಭಾವದಿಂದ
ಒಬ್ಬರನ್ನೊಬ್ಬರು ಪ್ರೀತಿಸಿರಿ. ನೀವು ನಿಮಗೋಸ್ಕರ ಬಯಸುವ
ಮರ್ಯಾದೆಗಿಂತಲೂ ಹೆಚ್ಚು ಮರ್ಯಾದೆಯನ್ನು ನಿಮ್ಮ
ಸಹೋದರ ಸಹೋದರಿಯರಿಗೆ ಕೊಡಿರಿ. 11ನೀವು ಪ್ರಭುವಿ
ಗೋಸ್ಕರ ಸೇವೆ ಮಾಡುವುದು ಅಗತ್ಯವಿರುವಾಗ ಸೋಮಾರಿ
ಗಳಾಗಿರಬೇಡಿರಿ. ಆತ್ಮಿಕವಾದ ಉತ್ಸಾಹದಿಂದ ಆತನ ಸೇವೆ
ಮಾಡಿರಿ. 12ನಿಮಗೆ ನಿರೀಕ್ಷೆಯಿರುವುದರಿಂದ ಸಂತೋಷ
ವಾಗಿರಿ. ನಿಮಗೆ ಸಂಕಟಗಳಿರುವಾಗ ತಾಳ್ಮೆಯಿಂದಿರಿ. ಎಲ್ಲಾ
ಸಮಯದಲ್ಲಿ ಪ್ರಾರ್ಥಿಸಿರಿ. 13ಕೊರತೆಯಲ್ಲಿರುವ ದೇವ
ಜನರಿಗೆ ಸಹಾಯ ಮಾಡಿರಿ. ಅತಿಥಿಸತ್ಕಾರದ ಅಗತ್ಯವಿರು
ವವರನ್ನು ಗುರುತಿಸಿ, ನಿಮ್ಮ ಮನೆಗಳಿಗೆ ಆಹ್ವಾನಿಸಿರಿ.

14ನಿಮಗೆ ಕೇಡು ಮಾಡುವವರನ್ನು ಶಪಿಸದೆ
ಆಶೀರ್ವದಿಸಿರಿ. 15ಸಂತೋಷಪಡುವವರ ಸಂಗಡ ಸಂತೋಷ
ಪಡಿರಿ. ದುಃಖಪಡುವವರೊಂದಿಗೆ ದುಃಖಪಡಿರಿ. 16ನೀವು
ಒಬ್ಬರಿಗೊಬ್ಬರು ಸಮಾಧಾನದಿಂದ ಒಟ್ಟಾಗಿ ಜೀವಿಸಿರಿ. ಗರ್ವ
ಪಡಬೇಡಿರಿ. ಸಮಾಜದಲ್ಲಿ ಗಣನೆಗೆ ಬಾರದ ಜನರೊಂದಿಗೆ
ಸ್ನೇಹದಿಂದಿರಲು ಅಪೇಕ್ಷಿಸಿರಿ. ನಿಮ್ಮನ್ನು ನೀವೇ ಬುದ್ಧಿವಂತ
ರೆಂದು ಎಣಿಸಿಕೊಳ್ಳಬೇಡಿರಿ.

17ಯಾವನಾದರೂ ನಿಮಗೆ ಕೇಡು ಮಾಡಿದರೆ, ಅದಕ್ಕೆ
ಪ್ರತಿಯಾಗಿ ಅವನಿಗೆ ಕೇಡು ಮಾಡಬೇಡಿ. ಎಲ್ಲಾ ಜನರು
ಒಳ್ಳೆಯದೆಂದು ಯೋಚಿಸುವ ಕಾರ್ಯಗಳನ್ನು ಮಾಡಲು
ಪ್ರಯತ್ನಿಸಿರಿ. 18ಎಲ್ಲಾ ಜನರೊಂದಿಗೆ ಶಾಂತಿಯಿಂದ ಜೀವಿ
ಸಲು ನಿಮ್ಮಿಂದ ಸಾಧ್ಯವಾದಷ್ಟರ ಮಟ್ಟಿಗೆ ಪ್ರಯತ್ನಿಸಿರಿ. 19ನನ್ನ
ಸ್ನೇಹಿತರೇ, ನಿಮಗೆ ಕೇಡು ಮಾಡುವ ಜನರನ್ನು ದಂಡಿಸಲು
ಪ್ರಯತ್ನಿಸಬೇಡಿ. ದೇವರು ತನ್ನ ಕೋಪದಿಂದ ಅವರನ್ನು
ದಂಡಿಸುವವರೆಗೆ ಕಾದುಕೊಂಡಿರಿ. ‘‘ನಾನೇ ದಂಡಿಸುವವನು;
ನಾನೇ ಜನರಿಗೆ ಮುಯ್ಯಿ ತೀರಿಸುವವನು ಎಂದು ಪ್ರಭುವು
ಹೇಳುತ್ತಾನೆ’’ * ಎಂಬುದಾಗಿ ಬರೆಯಲ್ಪಟ್ಟಿದೆ. 20ನೀವು ಮಾಡ
ಬೇಕಾದದ್ದೇನಂದರೆ, ‘‘ನಿಮ್ಮ ವೈರಿಯು ಹಸಿವೆಗೊಂಡಿದ್ದರೆ,
ಅವನಿಗೆ ಊಟ ಕೊಡಿರಿ. ನಿಮ್ಮ ವೈರಿಯು ಬಾಯಾರಿದ್ದರೆ
ಅವನಿಗೆ ಕುಡಿಯಲು ನೀರು ಕೊಡಿರಿ. ನೀವು ಹೀಗೆ ಮಾಡಿದರೆ,
ಅವನಿಗೆ ನಾಚಿಕೆಯಾಗುವುದು.’’ * 21ಕೆಟ್ಟತನವು ನಿಮ್ಮನ್ನು
ಸೋಲಿಸುವುದಕ್ಕೆ ಅವಕಾಶಕೊಡದೆ ಒಳ್ಳೆಯದನ್ನು ಮಾಡುವು
ದರ ಮೂಲಕವಾಗಿ ಕೆಟ್ಟತನವನ್ನು ಸೋಲಿಸಿರಿ.

---

**ನಾನೇ … ಹೇಳುತ್ತಾನೆ** ಧರ್ಮೋಪದೇಶ. 32:35.

**ನಿಮ್ಮ … ನಾಚಿಕೆಯಾಗುವುದು** ಜ್ಞಾನೋಕ್ತಿ. 25:21-22.

13 ನೀವೆಲ್ಲರೂ ಸರ್ಕಾರದ ಅಧಿಕಾರಿಗಳಿಗೆ ವಿಧೇಯ
ರಾಗಿರಬೇಕು. ಪ್ರತಿಯೊಬ್ಬ ಅಧಿಕಾರಿಗೆ ಅಧಿಕಾರ
ವನ್ನು ಕೊಟ್ಟಿರುವವನು ದೇವರೇ. ಈಗಿರುವ ಎಲ್ಲಾ
ಅಧಿಕಾರಿಗಳಿಗೆ ದೇವರೇ ಅಧಿಕಾರವನ್ನು ಕೊಟ್ಟಿದ್ದಾನೆ. [2]ಆದ್ದ
ರಿಂದ ಸರ್ಕಾರಕ್ಕೆ ವಿರೋಧವಾಗಿರುವ ವ್ಯಕ್ತಿಯು ನಿಜ
ವಾಗಿಯೂ ದೇವರ ಆಜ್ಞೆಗೇ ವಿರೋಧವಾಗಿದ್ದಾನೆ. ಸರ್ಕಾರಕ್ಕೆ
ವಿರೋಧವಾಗಿರುವ ಜನರು ತಮ್ಮ ಮೇಲೆ ತಾವೇ ದಂಡನೆ
ಯನ್ನು ಬರಮಾಡಿಕೊಳ್ಳುತ್ತಾರೆ. [3]ಸರಿಯಾದದ್ದನ್ನು ಮಾಡುವ
ಜನರಿಗೆ ಅಧಿಕಾರಿಗಳ ಭಯವಿರುವುದಿಲ್ಲ. ಆದರೆ ಕೆಟ್ಟದ್ದನ್ನು
ಮಾಡುವ ಜನರಿಗೆ ಅಧಿಕಾರಿಗಳ ಭಯವಿರುತ್ತದೆ. ನೀವು
ಅಧಿಕಾರಿಗಳಿಗೆ ಭಯಪಡದವರಾಗಿರಬೇಕೆಂದು ಅಪೇಕ್ಷಿಸು
ತ್ತೀರೋ? ಹಾಗಾದರೆ ನೀವು ಸರಿಯಾದದ್ದನ್ನೇ ಮಾಡಿರಿ. ಆಗ
ಅಧಿಕಾರಿಗಳು ನಿಮ್ಮನ್ನು ಹೊಗಳುವರು. [4]ಅಧಿಕಾರಿಯು ನಿಮ್ಮ
ಒಳ್ಳೆಯದಕ್ಕಾಗಿ ನೇಮಕಗೊಂಡಿರುವ ದೇವರ ಸೇವಕನಾಗಿ
ದ್ದಾನೆ. ಆದರೆ ನೀವು ಕೆಟ್ಟದ್ದನ್ನು ಮಾಡಿದರೆ ಭಯಪಡಲೇ
ಬೇಕು. ನಿಮ್ಮನ್ನು ದಂಡಿಸಲು ಅವನಿಗೆ ಅಧಿಕಾರವಿದೆ. ಅವನು
ಆ ಅಧಿಕಾರವನ್ನು ಉಪಯೋಗಿಸುವನು. ಅಧಿಕಾರಿಯು ಕೆಟ್ಟ
ದ್ದನ್ನು ಮಾಡುವ ಜನರನ್ನು ದಂಡಿಸುವುದಕ್ಕಾಗಿ ನೇಮಕ
ಗೊಂಡಿರುವ ದೇವರ ಸೇವಕನಾಗಿದ್ದಾನೆ. [5]ಆದ್ದರಿಂದ ನೀವು
ಸರ್ಕಾರಕ್ಕೆ ವಿಧೇಯರಾಗಬೇಕು. ಇಲ್ಲವಾದರೆ, ನೀವು
ದಂಡನೆಗೆ ಗುರಿಯಾಗಬಹುದು. ಅಲ್ಲದೆ ನಿಮ್ಮ ಮನಸ್ಸಾಕ್ಷಿಯ
ದೆಸೆಯಿಂದಾದರೂ ನೀವು ಅವರಿಗೆ ವಿಧೇಯರಾಗಬೇಕು.

[6]ಈ ಕಾರಣದಿಂದಲೇ ನೀವು ತೆರಿಗೆಯನ್ನು ಸಹ
ಕೊಡುತ್ತೀರಿ. ಆ ಅಧಿಕಾರಿಗಳು ದೇವರಿಗೋಸ್ಕರ ಕೆಲಸ
ಮಾಡುವವರಾಗಿದ್ದಾರೆ; ತಮ್ಮ ಸಮಯವನ್ನೆಲ್ಲಾ ಆಡಳಿತ
ಮಾಡಲು ಉಪಯೋಗಿಸುವವರಾಗಿದ್ದಾರೆ. [7]ನೀವು ಯಾರ್ಯಾ
ರಿಗೆ ಏನೇನು ಕೊಡಬೇಕೊ ಅದನ್ನೆಲ್ಲಾ ಅವರಿಗೆ ಕೊಡಿರಿ.
ಯಾವ ತೆರಿಗೆಯನ್ನಾದರೂ ಕೊಡಬೇಕಿದ್ದರೆ ಅದನ್ನು ಕೊಟ್ಟು
ಬಿಡಿರಿ. ಯಾರಿಗೆ ಗೌರವ ಕೊಡಬೇಕೊ ಅವರಿಗೆ ಗೌರವ
ಕೊಡಿರಿ. ಯಾರಿಗೆ ಮರ್ಯಾದೆ ತೋರಿಸಬೇಕೊ ಅವರಿಗೆ
ಮರ್ಯಾದೆಯನ್ನು ತೋರಿಸಿರಿ.

### ಇತರ ಜನರನ್ನು ಪ್ರೀತಿಸಬೇಕೆಂಬುದೇ ಧರ್ಮಶಾಸ್ತ್ರ

[8]ಜನರಿಗೆ ಯಾವ ವಿಷಯದಲ್ಲಿಯೂ ಸಾಲಗಾರರಾಗಿರ
ಬೇಡಿ. ಆದರೆ ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬ ವಿಷಯದಲ್ಲಿ
ಮಾತ್ರ ಯಾವಾಗಲೂ ಸಾಲಗಾರರಾಗಿದ್ದೀರಿ. ಇತರ ಜನರನ್ನು
ಪ್ರೀತಿಸುವ ವ್ಯಕ್ತಿಯು ಇಡೀ ಧರ್ಮಶಾಸ್ತ್ರಕ್ಕೆ ವಿಧೇಯನಾಗಿ
ದ್ದಾನೆ.

[9]ಏಕೆಂದರೆ, ‘‘ವ್ಯಭಿಚಾರ ಮಾಡಕೂಡದು; ಕೊಲೆ
ಮಾಡಕೂಡದು; ಕದಿಯಕೂಡದು; ಇತರರಿಗೆ ಸೇರಿದ
ವಸ್ತುಗಳನ್ನು ಅಪೇಕ್ಷಿಸಕೂಡದು’’ * ಎಂದು ಧರ್ಮಶಾಸ್ತ್ರವು
ಹೇಳುತ್ತದೆ. ಈ ಆಜ್ಞೆಗಳನ್ನು ಮೊದಲುಗೊಂಡು ಉಳಿದೆಲ್ಲಾ
ಆಜ್ಞೆಗಳು, ‘‘ನೀನು ನಿನ್ನನ್ನು ಪ್ರೀತಿಸುವಂತೆ ಇತರ ಜನರನ್ನೂ
ಪ್ರೀತಿಸು’’ * ಎಂಬ ಒಂದೇ ಆಜ್ಞೆಯಲ್ಲಿ ಅಡಕವಾಗಿದೆ.
[10]ಪ್ರೀತಿಯು ಬೇರೆಯವರಿಗೆ ಕೇಡು ಮಾಡುವುದಿಲ್ಲ. ಆದ್ದ
ರಿಂದ ಪ್ರೀತಿಸುವುದಕ್ಕೂ ಎಲ್ಲಾ ಆಜ್ಞೆಗಳಿಗೆ ವಿಧೇಯ
ರಾಗುವುದಕ್ಕೂ ವ್ಯತ್ಯಾಸವೇನೂ ಇಲ್ಲ.

[11]ನಾವು ಕ್ಲಿಷ್ಟಕರವಾದ ಸಮಯದಲ್ಲಿ ಜೀವಿಸುತ್ತಿರುವು
ದರಿಂದ ಈ ವಿಷಯಗಳನ್ನು ಹೇಳುತ್ತಿದ್ದೇನೆ ಎಂಬುದು ನಿಮಗೆ
ಗೊತ್ತೇ ಇದೆ. ಹೌದು, ನೀವು ನಿದ್ರೆಯಿಂದ ಎಚ್ಚರಗೊಳ್ಳುವ
ಕಾಲ ಇದಾಗಿದೆ. ನಾವು ವಿಶ್ವಾಸಿಗಳಾದ ಕಾಲಕ್ಕಿಂತ ಈಗ ನಮ್ಮ
ರಕ್ಷಣೆಯು ಸಮೀಪವಾಗಿದೆ. [12]‘‘ರಾತ್ರಿ’’ಯು ಬಹುಮಟ್ಟಿಗೆ
ಮುಗಿದುಹೋಗಿದೆ. ‘‘ಹಗಲು’’ ಬಹುಮಟ್ಟಿಗೆ ಬಂದಿದೆ.
ಆದ್ದರಿಂದ ಕತ್ತಲೆಗೆ ಸೇರಿದ ಕಾರ್ಯಗಳನ್ನು ಇನ್ನು ಮೇಲೆ
ಮಾಡದೆ ಬೆಳಕಿಗೆ ಸೇರಿದ ಕಾರ್ಯಗಳನ್ನು ಮಾಡಲು ನಮ್ಮನ್ನು
ಸಿದ್ಧಪಡಿಸಿಕೊಳ್ಳಬೇಕು. [13]ಹಗಲಿಗೆ ಸೇರಿದ ಜನರಂತೆ ಸರಿ
ಯಾದ ರೀತಿಯಲ್ಲಿ ಜೀವಿಸೋಣ. ಕೆಟ್ಟದಾದ ಮತ್ತು ವ್ಯರ್ಥ
ವಾದ ಔತಣಕೂಟಗಳನ್ನು ನಾವು ಏರ್ಪಡಿಸಕೂಡದು; ಕುಡಿದು
ಮತ್ತರಾಗಕೂಡದು; ನಾವು ಲೈಂಗಿಕ ಪಾಪವನ್ನಾಗಲಿ ನಮ್ಮ
ದೇಹದಿಂದ ಯಾವುದೇ ಬಗೆಯ ಪಾಪವನ್ನಾಗಲಿ ಮಾಡ
ಕೂಡದು; ವಾಗ್ವಾದಗಳನ್ನಾಗಲಿ ಜಗಳಗಳನ್ನಾಗಲಿ ಎಬ್ಬಿಸ
ಬಾರದು; ಅಲ್ಲದೆ ಹೊಟ್ಟೆಕಿಚ್ಚು ಪಡಬಾರದು. [14]ಪ್ರಭುವಾದ
ಯೇಸು ಕ್ರಿಸ್ತನನ್ನೇ ಧರಿಸಿಕೊಳ್ಳಿರಿ. ನಿಮ್ಮ ಪಾಪ ಸ್ವಭಾವವನ್ನು
ಹೇಗೆ ತೃಪ್ತಿಗೊಳಿಸಬೇಕೆಂದಾಗಲಿ ಕೆಟ್ಟಕಾರ್ಯಗಳನ್ನು ಮಾಡ
ಬೇಕೆಂಬ ಬಯಕೆಯನ್ನು ಹೇಗೆ ಪೂರೈಸಿಕೊಳ್ಳಬೇಕೆಂದಾಗಲಿ
ಆಲೋಚಿಸಬೇಡಿ.

### ಬೇರೆಯವರನ್ನು ಟೀಕಿಸಬೇಡಿ

14 ನಂಬಿಕೆಯಲ್ಲಿ ಬಲಹೀನನಾಗಿರುವ ವ್ಯಕ್ತಿಯನ್ನು
ನಿಮ್ಮ ಸಮುದಾಯಕ್ಕೆ ಸೇರಿಸಿಕೊಳ್ಳಿರಿ. ಅವನ
ವೈಯಕ್ತಿಕ ಅಭಿಪ್ರಾಯಗಳ ಬಗ್ಗೆ ಅವನೊಂದಿಗೆ ವಾಗ್ವಾದ
ಮಾಡಬೇಡಿ. [2]ಒಬ್ಬನು ಯಾವ ಬಗೆಯ ಆಹಾರವನ್ನಾದರೂ
ತಿನ್ನಬಹುದೆಂದು ಭಾವಿಸುತ್ತಾನೆ. ಆದರೆ ನಂಬಿಕೆಯಲ್ಲಿ
ಬಲಹೀನನಾಗಿರುವ ವ್ಯಕ್ತಿಯು ತಾನು ತರಕಾರಿಗಳನ್ನು ಮಾತ್ರ
ತಿನ್ನಬಹುದೆಂದು ಭಾವಿಸುತ್ತಾನೆ. [3]ಯಾವ ಬಗೆಯ ಆಹಾರ
ವನ್ನಾದರೂ ತಿನ್ನಬಹುದೆಂದು ನಂಬುವ ವ್ಯಕ್ತಿಯು ತರಕಾರಿ
ಗಳನ್ನು ಮಾತ್ರ ತಿನ್ನುವ ವ್ಯಕ್ತಿಗಿಂತ ತನ್ನನ್ನು ಉತ್ತಮನೆಂದು
ಭಾವಿಸಿಕೊಳ್ಳಕೂಡದು. ಅಂತೆಯೇ, ತರಕಾರಿಗಳನ್ನು ಮಾತ್ರ
ತಿನ್ನುವ ವ್ಯಕ್ತಿಯು, ಎಲ್ಲಾ ಆಹಾರ ಪದಾರ್ಥಗಳನ್ನು ತಿನ್ನುವ
ವ್ಯಕ್ತಿಯನ್ನು ತಪ್ಪಿತಸ್ಥನೆಂದು ನಿರ್ಣಯಿಸಕೂಡದು. ದೇವರು ಆ
ವ್ಯಕ್ತಿಯನ್ನೂ ಸ್ವೀಕರಿಸಿಕೊಂಡಿದ್ದಾನೆ. [4]ನೀನು ಮತ್ತೊಬ್ಬ
ವ್ಯಕ್ತಿಯ ಸೇವಕನಿಗೆ ತೀರ್ಪು ಮಾಡಕೂಡದು. ಅವನು
ಮಾಡುತ್ತಿರುವುದು ಸರಿಯೋ ತಪ್ಪೋ ಎಂಬುದನ್ನು ಅವನ
ಸ್ವಂತ ಯಜಮಾನನೇ ನಿರ್ಣಯಿಸುವನು. ಪ್ರಭುವಿನ ಸೇವಕನು
ನಿರ್ದೋಷಿಯಾಗಿರುತ್ತಾನೆ, ಏಕೆಂದರೆ ಪ್ರಭುವು ಅವನನ್ನು
ನಿರ್ದೋಷಿಯನ್ನಾಗಿ ಮಾಡಲು ಶಕ್ತನಾಗಿದ್ದಾನೆ.

[5]ಒಬ್ಬನು ಒಂದು ದಿನಕ್ಕಿಂತ ಮತ್ತೊಂದು ದಿನವನ್ನು ಹೆಚ್ಚು
ಮುಖ್ಯವೆಂದು ನಂಬಬಹುದು. ಆದರೆ ಇನ್ನೊಬ್ಬನು ಎಲ್ಲಾ ದಿನ
ಗಳು ಒಂದೇ ಎಂದು ನಂಬಬಹುದು. ಪ್ರತಿಯೊಬ್ಬ ವ್ಯಕ್ತಿಯೂ
ತನ್ನ ಸ್ವಂತ ಮನಸ್ಸಿನಲ್ಲಿರುವ ತನ್ನ ಸ್ವಂತ ನಂಬಿಕೆಗಳ ಬಗ್ಗೆ
ನಿಶ್ಚಯದಿಂದಿರಬೇಕು. [6]ಒಂದು ದಿನಕ್ಕಿಂತ ಮತ್ತೊಂದು ದಿನ
ವನ್ನು ಮುಖ್ಯವೆಂದು ಯೋಚಿಸುವ ವ್ಯಕ್ತಿಯು ಪ್ರಭುವಿಗೋಸ್ಕ

---

**ವ್ಯಭಿಚಾರ … ಅಪೇಕ್ಷಿಸಕೂಡದು** ವಿಮೋಚನ. 20:13,15,17.

**ನೀನು … ಪ್ರೀತಿಸು** ಯಾಜಕ. 19:18.

ರವಾಗಿಯೇ ಹಾಗೆ ಯೋಚಿಸುವವನಾಗಿದ್ದಾನೆ. ಅಂತೆಯೇ
ಎಲ್ಲಾ ಬಗೆಯ ಆಹಾರ ಪದಾರ್ಥಗಳನ್ನು ತಿನ್ನುವ ವ್ಯಕ್ತಿಯು
ಪ್ರಭುವಿಗೋಸ್ಕರವೇ ಅವುಗಳನ್ನು ತಿನ್ನುತ್ತಾನೆ. ಹೌದು, ಅವನು
ಆ ಆಹಾರಕ್ಕಾಗಿ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತಾನೆ. ಕೆಲವು
ಆಹಾರಪದಾರ್ಥಗಳನ್ನು ತಿನ್ನದಿರುವ ವ್ಯಕ್ತಿಯು ಪ್ರಭುವಿ
ಗೋಸ್ಕರವೇ ಅವುಗಳನ್ನು ತಿನ್ನುವುದಿಲ್ಲ. ಅವನೂ ದೇವರಿಗೆ
ಕೃತಜ್ಞತೆಯನ್ನು ಸಲ್ಲಿಸುತ್ತಾನೆ. 7ಹೌದು, ನಾವೆಲ್ಲರೂ ಪ್ರಭುವಿ
ಗೋಸ್ಕರವೇ ಜೀವಿಸುವವರಾಗಿದ್ದೇವೆ. ನಾವು ಜೀವಿಸುವು
ದಾಗಲಿ ಸಾಯುವುದಾಗಲಿ ನಮಗೋಸ್ಕರವಲ್ಲ. 8ನಾವು
ಬದುಕುವುದಾಗಿದ್ದರೆ, ಪ್ರಭುವಿಗೋಸ್ಕರ ಬದುಕುತ್ತೇವೆ;
ಸಾಯುವುದಾಗಿದ್ದರೆ, ಪ್ರಭುವಿಗೋಸ್ಕರ ಸಾಯುತ್ತೇವೆ. ಆದ್ದ
ರಿಂದ ಬದುಕಿದರೂ ಸತ್ತರೂ ನಾವು ಪ್ರಭುವಿಗೆ ಸೇರಿದವ
ರಾಗಿದ್ದೇವೆ.

9ಆದಕಾರಣ, ಮತ್ತೆ ಜೀವಿಸುವುದಕ್ಕಾಗಿಯೇ ಕ್ರಿಸ್ತನು ಸತ್ತು
ಸಮಾಧಿಯೊಳಗಿಂದ ಜೀವಂತವಾಗಿ ಎದ್ದು ಬಂದನು. ಸತ್ತು
ಹೋದ ಜನರಿಗೂ ಬದುಕಿರುವ ಜನರಿಗೂ ತಾನು
ಪ್ರಭುವಾಗಿರಬೇಕೆಂದು ಆತನು ಹೀಗೆ ಮಾಡಿದನು. 10ಹೀಗಿ
ರಲು, ಕ್ರಿಸ್ತನಲ್ಲಿ ನಿನ್ನ ಸಹೋದರನಾಗಿರುವವನನ್ನು ನೀನು
ಟೀಕಿಸುವುದೇಕೆ? ನೀನು ನಿನ್ನನ್ನು ನಿನ್ನ ಸಹೋದರನಿಗಿಂತಲೂ
ಉತ್ತಮನೆಂದು ಯೋಚಿಸುವುದೇಕೆ? ನಾವೆಲ್ಲರೂ ದೇವರ
ಮುಂದೆ ನಿಂತುಕೊಳ್ಳುವೆವು, ಆಗ ಆತನು ನಮ್ಮೆಲ್ಲರಿಗೂ ತೀರ್ಪು
ಕೊಡುವನು.

11ಹೌದು, ಪವಿತ್ರ ಗ್ರಂಥದಲ್ಲಿ ಹೀಗೆ ಬರೆಯಲ್ಪಟ್ಟಿದೆ:

''ಪ್ರತಿಯೊಬ್ಬನೂ ನನಗೆ ಅಡ್ಡಬೀಳುವನು. ಪ್ರತಿ
ಯೊಬ್ಬನೂ ನನ್ನನ್ನು ದೇವರೆಂದು ಹೇಳುವನು.
ನನ್ನ ಜೀವದಾಣೆಯಾಗಿಯೂ ಈ ಸಂಗತಿಗಳು
ನೆರವೇರುತ್ತವೆ ಎನ್ನುತ್ತಾನೆ ಪ್ರಭುವು.''
*ಯೆಶಾಯ 45:23*

12ಆದ್ದರಿಂದ ನಮ್ಮಲ್ಲಿ ಪ್ರತಿಯೊಬ್ಬರೂ ನಮ್ಮ ನಮ್ಮ
ಜೀವಿತದ ಬಗ್ಗೆ ದೇವರಿಗೆ ಲೆಕ್ಕ ಒಪ್ಪಿಸಬೇಕು.

### ಬೇರೆಯವರ ಪಾಪಕ್ಕೆ ನೀವು ಕಾರಣರಾಗಬೇಡಿ

13ಆದ್ದರಿಂದ, ನಾವು ಒಬ್ಬರಿಗೊಬ್ಬರು ತೀರ್ಪುಕೊಡುವು
ದನ್ನು ಬಿಟ್ಟುಬಿಡಬೇಕು. ನಮ್ಮ ಸಹೋದರನನ್ನಾಗಲಿ
ಸಹೋದರಿಯನ್ನಾಗಲಿ ಬಲಹೀನಗೊಳಿಸುವಂಥ ಅಥವಾ
ಪಾಪಕ್ಕೆ ಬೀಳಿಸುವಂಥ ಯಾವುದನ್ನೇ ಆಗಲಿ ಮಾಡದಂತೆ ನಾವು
ನಿರ್ಧರಿಸಬೇಕು. 14ನಾನು ಪ್ರಭುವಾದ ಯೇಸುವಿನಲ್ಲಿದ್ದೇನೆ.
ಯಾವ ಆಹಾರ ಪದಾರ್ಥವನ್ನೇ ಆಗಲಿ ತಿನ್ನುವುದು ತಪ್ಪಲ್ಲ
ವೆಂದು ನನಗೆ ಗೊತ್ತಿದೆ. ಒಬ್ಬನು ಯಾವುದಾದರೂ ಆಹಾರ
ಪದಾರ್ಥವನ್ನು ತಿನ್ನುವುದು ತಪ್ಪೆಂದು ನಂಬಿದರೆ, ಆ ಆಹಾರ
ಪದಾರ್ಥವು ಅವನಿಗೆ ಅಶುದ್ಧವಾಗುತ್ತದೆ. 15ನೀನು ತಿನ್ನುವ
ಒಂದು ಆಹಾರಪದಾರ್ಥದಿಂದ ನಿನ್ನ ಸಹೋದರನ ನಂಬಿಕೆಗೆ
ನೀನು ತೊಂದರೆಯನ್ನು ಮಾಡಿದರೆ, ನೀನು ಪ್ರೀತಿಯ ಮಾರ್ಗ
ವನ್ನು ನಿಜವಾಗಿಯೂ ಅನುಸರಿಸುತ್ತಿಲ್ಲ. ಒಬ್ಬನು ಯಾವುದಾ
ದರೂ ಆಹಾರಪದಾರ್ಥವನ್ನು ತಿನ್ನುವುದು ತಪ್ಪೆಂದು ಭಾವಿಸಿ
ಕೊಂಡಿರುವಾಗ, ನೀನು ಆ ಪದಾರ್ಥವನ್ನು ತಿಂದರೆ ಅವನ
ನಂಬಿಕೆ ಹಾಳಾಗುವುದು. ಆದ್ದರಿಂದ ನೀನು ಹಾಗೆ ಮಾಡ
ಕೂಡದು. ಕ್ರಿಸ್ತನು ಆ ವ್ಯಕ್ತಿಗಾಗಿಯೂ ಸತ್ತನು. 16ನೀನು
ಯಾವುದನ್ನು ಒಳ್ಳೆಯದೆಂದು ಆಲೋಚಿಸುವಿಯೋ ಅದು
ಬೇರೆಯವರಿಂದ ಕೆಟ್ಟದ್ದು ಎಂಬ ಟೀಕೆಗೆ ಒಳಗಾಗದಂತೆ ಎಚ್ಚರ
ವಹಿಸು. 17ದೇವರ ರಾಜ್ಯದಲ್ಲಿ ತಿನ್ನುವುದಾಗಲಿ ಕುಡಿಯುವು
ದಾಗಲಿ ಮುಖ್ಯವಲ್ಲ. ನೀತಿಯೂ ಸಮಾಧಾನವೂ ಪವಿತ್ರಾತ್ಮ
ನಿಂದಾಗುವ ಆನಂದವೂ ಅಲ್ಲಿ ಮುಖ್ಯವಾಗಿವೆ. 18ಈ ರೀತಿ
ಯಲ್ಲಿ ಕ್ರಿಸ್ತನ ಸೇವೆ ಮಾಡುವವನು ದೇವರನ್ನು ಮೆಚ್ಚಿಸುವವ
ನಾಗಿದ್ದಾನೆ. ಜನರೂ ಅವನನ್ನು ಸ್ವೀಕರಿಸಿಕೊಳ್ಳುವರು.

19ಆದ್ದರಿಂದ ಸಮಾಧಾನವನ್ನು ಉಂಟುಮಾಡುವ
ಕಾರ್ಯಗಳನ್ನು ನಮ್ಮಿಂದ ಸಾಧ್ಯವಾದಷ್ಟರ ಮಟ್ಟಿಗೆ ಮಾಡಲು
ನಾವು ಪ್ರಯತ್ನಿಸೋಣ. ಪರಸ್ಪರ ಸಹಾಯಕವಾದ ಕಾರ್ಯ
ಗಳನ್ನೇ ಮಾಡಲು ನಾವು ಪ್ರಯತ್ನಿಸೋಣ. ದೇವರ ಕಾರ್ಯ
ವನ್ನು ನಾಶಪಡಿಸಲು ಆಹಾರಕ್ಕೆ ಅವಕಾಶ ಕೊಡಬೇಡಿ.
20ಎಲ್ಲಾ ಆಹಾರಪದಾರ್ಥಗಳು ಶುದ್ಧವಾಗಿವೆ ಮತ್ತು ತಿನ್ನಲು
ಯೋಗ್ಯವಾಗಿವೆ. ಆದರೆ ಒಬ್ಬನು ತಾನು ತಿನ್ನುವ ಆಹಾರ
ಪದಾರ್ಥದ ಮೂಲಕ ಮತ್ತೊಬ್ಬ ವ್ಯಕ್ತಿಯನ್ನು ಪಾಪಕ್ಕೆ ಬೀಳಿಸು
ವುದಾಗಿದ್ದರೆ, ಅವನು ಆ ಪದಾರ್ಥವನ್ನು ತಿನ್ನುವುದೇ ತಪ್ಪು.
21ನೀನು ಮಾಂಸ ತಿನ್ನುವುದು ಅಥವಾ ದ್ರಾಕ್ಷಾರಸ ಕುಡಿ
ಯುವುದು, ನಿನ್ನ ಸೋದರನನ್ನಾಗಲಿ ಸಹೋದರಿಯನ್ನಾಗಲಿ
ಪಾಪಕ್ಕೆ ಬೀಳಿಸುವುದಾಗಿದ್ದರೆ ಮಾಂಸವನ್ನು ತಿನ್ನದೆ, ದ್ರಾಕ್ಷಾ
ರಸವನ್ನು ಕುಡಿಯದೇ ಇರುವುದು ಉತ್ತಮ. ನಿನ್ನ ಸಹೋದರನ
ನ್ನಾಗಲಿ ಸಹೋದರಿಯನ್ನಾಗಲಿ ಪಾಪಕ್ಕೆ ಬೀಳಿಸುವಂಥದ್ದನ್ನು
ಮಾಡದಿರುವುದೇ ಉತ್ತಮ.

22ಈ ಸಂಗತಿಗಳ ಬಗ್ಗೆ ನಿನಗಿರುವ ವಿಶ್ವಾಸವು ನಿನಗೂ
ದೇವರಿಗೂ ಮಾತ್ರ ತಿಳಿದಿರಲಿ. ತನಗೆ ಸರಿಯೆನಿಸಿದ ಕಾರ್ಯ
ಗಳನ್ನು ತಾನು ದೋಷಿಯಾಗುತ್ತೇನೆಂಬ ಸಂಶಯವಿಲ್ಲದೆ
ಮಾಡುವವನೇ ಭಾಗ್ಯವಂತನು. 23ಆದರೆ ಒಬ್ಬನು ತಾನು
ತಿನ್ನುವ ಪದಾರ್ಥದಲ್ಲಿ ದೋಷವಿಲ್ಲ ಎಂಬ ದೃಢನಂಬಿಕೆ
ಯಿಲ್ಲದೆ ತಿಂದರೆ, ಅವನು ತನ್ನನ್ನೇ ತಪ್ಪಿತಸ್ಥನನ್ನಾಗಿ ಮಾಡಿ
ಕೊಳ್ಳುತ್ತಾನೆ. ಏಕೆಂದರೆ ಅದು ದೋಷರಹಿತವಾದದ್ದು ಎಂಬ
ನಂಬಿಕೆ ಅವನಲ್ಲಿಲ್ಲ. ನಂಬಿಕೆಯ ಆಧಾರವಿಲ್ಲದೆ ಮಾಡುವು
ದೆಲ್ಲವೂ ಪಾಪವೇ.

### ನಾವು ನಂಬಿಕೆಯಲ್ಲಿ ಬಲವಾಗಿದ್ದೇವೆ

15 ಆದ್ದರಿಂದ ನಂಬಿಕೆಯಲ್ಲಿ ಬಲಹೀನವಾಗಿರುವವರ
ಬಲಹೀನತೆಗಳನ್ನು ನಾವು ಸಹಿಸಿಕೊಳ್ಳಬೇಕು. ನಾವು
ಕೇವಲ ನಮ್ಮ ಹಿತವನ್ನು ಮಾತ್ರ ನೋಡಿಕೊಳ್ಳಬಾರದು.
2ನಮ್ಮಲ್ಲಿ ಪ್ರತಿಯೊಬ್ಬರು ಇತರ ಜನರ ಹಿತವನ್ನು ನೋಡಿ
ಕೊಳ್ಳಬೇಕು. ನಂಬಿಕೆಯಲ್ಲಿ ಬಲಹೀನರಾಗಿರುವವರನ್ನು ಬಲ
ಗೊಳಿಸಲು ನೆರವಾಗಿರಬೇಕು. 3ಕ್ರಿಸ್ತನು ಸಹ ತನ್ನ ಜೀವಮಾನ
ದಲ್ಲಿ ತನ್ನ ಹಿತಕ್ಕಾಗಿ ಪ್ರಯತ್ನಿಸಲಿಲ್ಲ. ''ನಿನಗೆ ಅವಮಾನ
ಮಾಡಿದ ಜನರು ನನಗೂ ಅವಮಾನ ಮಾಡಿದರು'' * ಎಂಬು
ದಾಗಿ ಆತನ ಬಗ್ಗೆ ಪವಿತ್ರ ಗ್ರಂಥದಲ್ಲಿ ಬರೆಯಲ್ಪಟ್ಟಿದೆ. 4ಹಿಂದಿನ
ಕಾಲದಲ್ಲಿ ಬರೆಯಲ್ಪಟ್ಟಿರುವ ಪ್ರತಿಯೊಂದೂ ನಮ್ಮ ಉಪದೇಶ

---

**ನಿನಗೆ … ಮಾಡಿದರು** ಕೀರ್ತನೆ 69:9.

ಕ್ಕಾಗಿಯೇ ಬರೆಯಲ್ಪಟ್ಟಿದೆ. ನಾವು ನಿರೀಕ್ಷೆ ಉಳ್ಳವರಾಗಿರ
ಬೇಕೆಂದು ಆ ಸಂಗತಿಗಳು ಬರೆಯಲ್ಪಟ್ಟಿವೆ. ಪವಿತ್ರ ಗ್ರಂಥವು
ನಮಗೆ ಕೊಡುವ ತಾಳ್ಮೆಯಿಂದಲೂ ಶಕ್ತಿಯಿಂದಲೂ ಈ
ನಿರೀಕ್ಷೆ ಬರುತ್ತದೆ. 5ತಾಳ್ಮೆ ಮತ್ತು ಶಕ್ತಿ ದೇವರಿಂದ ಬರುತ್ತವೆ.
ಕ್ರಿಸ್ತ ಯೇಸು ಬಯಸುವ ಮಾರ್ಗವನ್ನು ನೀವೆಲ್ಲರೂ ಒಟ್ಟಾಗಿ
ಒಪ್ಪಿಕೊಳ್ಳಲು ದೇವರು ನಿಮಗೆ ಸಹಾಯ ಮಾಡಲೆಂದು ನಾನು
ಪ್ರಾರ್ಥಿಸುತ್ತೇನೆ. 6ಹೀಗೆ ನೀವೆಲ್ಲರೂ ಒಂದೇ ಹೃದಯ
ದಿಂದಲೂ ಒಂದೇ ಮನಸ್ಸಿನಿಂದಲೂ ನಮ್ಮ ಪ್ರಭುವಾದ
ಯೇಸು ಕ್ರಿಸ್ತನ ತಂದೆಯಾದ ದೇವರನ್ನು ಮಹಿಮೆಪಡಿಸುವಿರಿ.
7ಕ್ರಿಸ್ತನು ನಿಮ್ಮನ್ನು ಸ್ವೀಕರಿಸಿಕೊಂಡನು. ಆದ್ದರಿಂದ ನೀವು
ಒಬ್ಬರನ್ನೊಬ್ಬರು ಸ್ವೀಕರಿಸಿಕೊಳ್ಳಬೇಕು. ಇದು ದೇವರಿಗೆ
ಮಹಿಮೆಯನ್ನು ಉಂಟುಮಾಡುತ್ತದೆ. ದೇವರು ನಮ್ಮ ಪಿತೃ
ಗಳಿಗೆ ಮಾಡಿದ ವಾಗ್ದಾನಗಳು ಸತ್ಯವಾದುವುಗಳೆಂದು ತೋರಿಸು
ವುದಕ್ಕಾಗಿಯೂ ದೇವರು ಆ ವಾಗ್ದಾನಗಳನ್ನು ನೆರವೇರಿಸುತ್ತಾನೆ
ಎಂಬುದನ್ನು ನಿರೂಪಿಸುವುದಕ್ಕಾಗಿಯೂ 9ದೇವರು ತಮಗೆ
ತೋರುವ ಕರುಣೆಗಾಗಿ ಯೆಹೂದ್ಯರಲ್ಲದವರು ಆತನನ್ನು
ಮಹಿಮೆಪಡಿಸಲೆಂದು ಕ್ರಿಸ್ತನು ಯೆಹೂದ್ಯರ ಸೇವಕನಾದನು.
ಪವಿತ್ರ ಗ್ರಂಥದಲ್ಲಿ ಈ ರೀತಿ ಬರೆಯಲ್ಪಟ್ಟಿದೆ:

> ‘‘ಆದ್ದರಿಂದ ಯೆಹೂದ್ಯರಲ್ಲದ ಜನರ ಮಧ್ಯದಲ್ಲಿ
> ನಾನು ನಿನ್ನನ್ನು ಸ್ತುತಿಸುವೆನು: ನಾನು ನಿನ್ನ
> ಹೆಸರನ್ನು ಸಂಕೀರ್ತಿಸುವೆನು.’’
>
> *ಕೀರ್ತನೆ 18:49*

10ಇದಲ್ಲದೆ ಪವಿತ್ರ ಗ್ರಂಥವು ಇಂತೆನ್ನುತ್ತದೆ:

> ‘‘ಯೆಹೂದ್ಯರಲ್ಲದ ನೀವು ದೇವರ ಸ್ವಂತ ಜನ
> ರೊಂದಿಗೆ ಸೇರಿ ಸಂತೋಷದಿಂದಿರಬೇಕು.’’
>
> *ಧರ್ಮೋಪದೇಶ. 32:43*

11ಮತ್ತೊಂದು ಕಡೆ ಪವಿತ್ರ ಗ್ರಂಥವು ಹೀಗೆ ಹೇಳುತ್ತದೆ:

> ‘‘ಯೆಹೂದ್ಯರಲ್ಲದ ನೀವೆಲ್ಲರೂ ಪ್ರಭುವನ್ನು
> ಸ್ತುತಿಸಿರಿ. ಎಲ್ಲಾ ಜನರು ಪ್ರಭುವಿಗೆ ಸ್ತೋತ್ರ
> ಮಾಡಲಿ.’’ *ಕೀರ್ತನೆ 117:1*

12ಯೆಶಾಯನು ಹೀಗೆ ಹೇಳಿದ್ದಾನೆ:

> ‘‘ಇಷಯನ ಕುಟುಂಬದಿಂದ ಒಬ್ಬ ವ್ಯಕ್ತಿಯು ಬರು
> ವನು. ಆತನು ಯೆಹೂದ್ಯರಲ್ಲದವರನ್ನು ಆಳುವು
> ದಕ್ಕಾಗಿ ಬರುವನು. ಯೆಹೂದ್ಯರಲ್ಲದ ಜನರು
> ಆತನಲ್ಲಿ ನಿರೀಕ್ಷೆಯನ್ನು ಹೊಂದಿಕೊಳ್ಳುವರು.’’
>
> *ಯೆಶಾಯ 11:10*

13ನಿರೀಕ್ಷೆಯನ್ನು ಕೊಡುವ ದೇವರು ನಂಬಿಕೆಯಿಂದ
ಉಂಟಾಗುವ ಆನಂದವನ್ನೂ ಸಮಾಧಾನವನ್ನೂ ನಿಮಗೆ
ಸಂಪೂರ್ಣವಾಗಿ ದಯಪಾಲಿಸಲೆಂದು ನಾನು ಪ್ರಾರ್ಥಿಸು
ತ್ತೇನೆ. ಆಗ ಪವಿತ್ರಾತ್ಮನ ಶಕ್ತಿಯ ಮೂಲಕ ನಿರೀಕ್ಷೆಯು
ನಿಮ್ಮಲ್ಲಿ ತುಂಬಿ ಹೊರಸೂಸುವುದು.

### ತನ್ನ ಸೇವೆಯ ಬಗ್ಗೆ ಪೌಲನ ವಿವರಣೆ

14ನನ್ನ ಸಹೋದರ ಸಹೋದರಿಯರೇ, ನಿಮ್ಮಲ್ಲಿ
ಒಳ್ಳೆಯತನವು ತುಂಬಿದೆಯೆಂದು ನನಗೆ ನಿಶ್ಚಯವಾಗಿ ಗೊತ್ತಿದೆ.
ಅಗತ್ಯವಾದ ಸಕಲ ಜ್ಞಾನವು ನಿಮಗಿದೆಯೆಂದು ಮತ್ತು ನೀವು
ಒಬ್ಬರಿಗೊಬ್ಬರು ಸಲಹೆ ನೀಡಬಲ್ಲಿರೆಂದು ನನಗೆ ಗೊತ್ತಿದೆ.
15ನೀವು ಜ್ಞಾಪಕದಲ್ಲಿ ಇಟ್ಟುಕೊಳ್ಳಬೇಕೆಂದು ನಾನು
ಅಪೇಕ್ಷಿಸಿದ ಕೆಲವು ಸಂಗತಿಗಳನ್ನು ನಾನು ನಿಮಗೆ ಧೈರ್ಯವಾಗಿ
ಬರೆದಿರುವೆ. ಕ್ರಿಸ್ತ ಯೇಸುವಿನ ಸೇವಕ ಎಂಬ ವಿಶೇಷವಾದ
ವರವನ್ನು ದೇವರು ನನಗೆ ಕೊಟ್ಟಿರುವುದರಿಂದ ನಾನು ಹೀಗೆ
ಬರೆದಿದ್ದೇನೆ. 16ಯೆಹೂದ್ಯರಲ್ಲದ ಜನರಿಗೆ ಸಹಾಯ ಮಾಡು
ವುದಕ್ಕಾಗಿ ದೇವರು ನನ್ನನ್ನು ತನ್ನ ಸೇವಕನನ್ನಾಗಿ ಮಾಡಿ
ಕೊಂಡನು. ದೇವರ ಸುವಾರ್ತೆಯನ್ನು ಉಪದೇಶಿಸುವುದರ
ಮೂಲಕ ನಾನು ಆತನ ಸೇವೆ ಮಾಡುವವನಾಗಿದ್ದೇನೆ.
ಯೆಹೂದ್ಯರಲ್ಲದ ಜನರು ಸಹ ದೇವರು ಸ್ವೀಕರಿಸಿಕೊಳ್ಳುವ
ಕಾಣಿಕೆಯಂತಾಗಬೇಕೆಂದು ನಾನು ಈ ಸೇವೆ ಮಾಡುವವ
ನಾಗಿದ್ದೇನೆ. ಆ ಜನರು ದೇವರಿಗೋಸ್ಕರವಾಗಿ ಪವಿತ್ರಾತ್ಮನ
ಮೂಲಕ ಪವಿತ್ರರಾಗಿದ್ದಾರೆ.

17ಆದ್ದರಿಂದ ಕ್ರಿಸ್ತ ಯೇಸುವಿನಲ್ಲಿ ನಾನು ದೇವರಿಗೋಸ್ಕರ
ಮಾಡುವ ಕಾರ್ಯಗಳ ಬಗ್ಗೆ ಹೆಮ್ಮೆಪಡುತ್ತೇನೆ. 18ನಾನು ನನ್ನ
ಸ್ವಕಾರ್ಯಗಳ ಬಗ್ಗೆಯೂ ಮಾತಾಡುವುದಿಲ್ಲ. ಯೆಹೂದ್ಯ
ರಲ್ಲದ ಜನರನ್ನು ತನಗೆ ವಿಧೇಯರನ್ನಾಗಿ ಮಾಡಿಕೊಳ್ಳಲು
ಕ್ರಿಸ್ತನು ನನ್ನ ಮೂಲಕ ಮಾತಿನಲ್ಲಿಯೂ ಕ್ರಿಯೆಯಲ್ಲಿಯೂ
ಮಾಡಿದ ಕಾರ್ಯಗಳನ್ನು ಹೇಳಿಕೊಳ್ಳುತ್ತೇನೆ. 19ಅದ್ಭುತ
ಕಾರ್ಯಗಳ ಶಕ್ತಿಯನ್ನು ಮತ್ತು ಮಹಾಕಾರ್ಯಗಳನ್ನು
ನೋಡಿದ್ದರಿಂದಲೂ ಪವಿತ್ರಾತ್ಮನ ಶಕ್ತಿಯ ನಿಮಿತ್ತದಿಂದಲೂ
ಅವರು ದೇವರಿಗೆ ವಿಧೇಯರಾದರು. ನಾನು ಜೆರುಸಲೇಮಿ
ನಿಂದ ಇಲ್ಲುರಿಕ ಪ್ರಾಂತ್ಯದವರೆಗೂ ಸುವಾರ್ತೆಯನ್ನು
ಬೋಧಿಸಿ, ನನ್ನ ಆ ಕರ್ತವ್ಯವನ್ನು ಪೂರೈಸಿದ್ದೇನೆ. 20ಕ್ರಿಸ್ತನ ಬಗ್ಗೆ
ಜನರು ಎಂದೂ ಕೇಳಿಲ್ಲದ ಸ್ಥಳಗಳಲ್ಲಿ ಸುವಾರ್ತೆಯನ್ನು
ಬೋಧಿಸಲು ನಾನು ಯಾವಾಗಲೂ ಅಪೇಕ್ಷಿಸುತ್ತೇನೆ;
ಏಕೆಂದರೆ ಮತ್ತೊಬ್ಬನು ಆಗಲೇ ಆರಂಭಿಸಿರುವ ಕೆಲಸದ ಮೇಲೆ
ಕಟ್ಟಲು ನನಗೆ ಇಷ್ಟವಿಲ್ಲ. 21ಆದರೆ ಇದು ಸಹ ಪವಿತ್ರ
ಗ್ರಂಥದಲ್ಲಿ ಬರೆಯಲ್ಪಟ್ಟಿದೆ:

> ‘‘ಆತನ ಬಗ್ಗೆ ತಿಳಿಯದ ಜನರು ಆತನನ್ನು (ಕ್ರಿಸ್ತ
> ನನ್ನು) ನೋಡುವರು. ಆತನ ಬಗ್ಗೆ ಕೇಳಿಲ್ಲದ
> ಜನರು ಆತನನ್ನು ಅರ್ಥಮಾಡಿಕೊಳ್ಳುವರು.’’
>
> *ಯೆಶಾಯ 52:15*

### ರೋಮಿಗೆ ಹೋಗಲು ಪೌಲನ ಯೋಜನೆ

22ಈ ಕಾರಣದಿಂದಲೇ, ನಿಮ್ಮ ಬಳಿಗೆ ಬಾರದಂತೆ ನನಗೆ
ಅನೇಕ ಸಲ ಅಡಚಣೆ ಆಯಿತು.

23ಆದರೆ ಈಗ ಈ ಪ್ರಾಂತ್ಯಗಳಲ್ಲಿ ನಾನು ಮಾಡಬೇಕಾಗಿದ್ದ
ಸೇವೆಯನ್ನು ಮಾಡಿ ಮುಗಿಸಿದ್ದೇನೆ. ಅನೇಕ ವರ್ಷಗಳಿಂದ
ನಾನು ನಿಮ್ಮ ಬಳಿಗೆ ಬರಬೇಕೆಂದಿದ್ದೆ. 24ಆದ್ದರಿಂದ ನಾನು
ಸ್ಪೇನಿಗೆ ಹೋಗುವಾಗ ನಿಮ್ಮನ್ನು ಸಂದರ್ಶಿಸುತ್ತೇನೆ. ಹೌದು,
ನಾನು ಸ್ಪೇನಿಗೆ ಪ್ರಯಾಣ ಮಾಡುವಾಗ ನಿಮ್ಮನ್ನು ಸಂದರ್ಶಿಸಿ,
ಸ್ವಲ್ಪಕಾಲ ನಿಮ್ಮೊಂದಿಗೆ ಸಂತೋಷವಾಗಿ ತಂಗಿರುತ್ತೇನೆಂಬ
ನಿರೀಕ್ಷೆ ನನಗಿದೆ. ಬಳಿಕ ನೀವು ನನ್ನ ಪ್ರಯಾಣಕ್ಕೆ ಸಹಾಯ
ಮಾಡಬಹುದು. 25ಈಗ ನಾನು ದೇವಜನರಿಗೆ ಸಹಾಯ
ಮಾಡುವುದಕ್ಕಾಗಿ ಜೆರುಸಲೇಮಿಗೆ ಹೋಗುತ್ತಿದ್ದೇನೆ. 26ಅಲ್ಲಿನ
ದೇವ ಜನರಲ್ಲಿ ಕೆಲವರು ಬಡವರಾಗಿದ್ದಾರೆ. ಮಕೆದೋನಿಯ
ಮತ್ತು ಅಖಾಯದ ವಿಶ್ವಾಸಿಗಳು ಅಲ್ಲಿನ ಬಡಜನರಿಗಾಗಿ
ಸಂತೋಷದಿಂದ ಧನಸಹಾಯ ಮಾಡಿದ್ದಾರೆ.

27ಮಕೆದೋನಿಯ ಮತ್ತು ಅಖಾಯದ ವಿಶ್ವಾಸಿಗಳು
ಸ್ವಇಷ್ಟದಿಂದಲೇ ಈ ಕಾರ್ಯವನ್ನು ಮಾಡಿದ್ದಾರೆ. ಅದು ಅವರ
ಕರ್ತವ್ಯವೂ ಹೌದು. ಯೆಹೂದ್ಯರಲ್ಲದ ಅವರು ಯೆಹೂದ್ಯರ
ಆತ್ಮಿಕ ಆಶೀರ್ವಾದಗಳಲ್ಲಿ ಪಾಲು ಹೊಂದಿರುವುದರಿಂದ
ಅವರು ತಮ್ಮಲ್ಲಿರುವಂಥವುಗಳ ಮೂಲಕ ಅವರಿಗೆ ನೆರವು
ನೀಡುವುದು ಅವರ ಹೊಣೆಯಾಗಿದೆ. 28ಜೆರುಸಲೇಮಿನ ಬಡ
ಜನರಿಗೋಸ್ಕರ ಕೊಟ್ಟಿರುವ ಈ ಹಣವನ್ನೆಲ್ಲಾ ಸುರಕ್ಷಿತವಾಗಿ
ಅವರಿಗೆ ತಲುಪಿಸಿದ ಮೇಲೆ ನಾನು ಸ್ಪೇನಿಗೆ ಹೊರಡುವೆನು.
ನಾನು ಸ್ಪೇನಿಗೆ ಪ್ರಯಾಣ ಮಾಡುವಾಗ (ರೋಮಿನಲ್ಲಿ)
ಇಳಿದು ನಿಮ್ಮನ್ನು ಸಂದರ್ಶಿಸುವೆನು. 29ನಾನು ನಿಮ್ಮ ಬಳಿಗೆ
ಬರುವಾಗ ಕ್ರಿಸ್ತನ ಆಶೀರ್ವಾದವನ್ನು ಹೇರಳವಾಗಿ
ತರುತ್ತೇನೆಂದು ಬಲ್ಲೆನು.

30ಸಹೋದರ ಸಹೋದರಿಯರೇ, ನೀವು ನನಗೋಸ್ಕರ
ದೇವರಲ್ಲಿ ಪ್ರಾರ್ಥಿಸುವುದರ ಮೂಲಕ ನನ್ನ ಸೇವೆಗೆ ಸಹಾಯ
ಮಾಡಬೇಕೆಂದು ನಾನು ನಿಮ್ಮನ್ನು ಬೇಡಿಕೊಳ್ಳುತ್ತೇನೆ. ನಮ್ಮ
ಪ್ರಭುವಾದ ಯೇಸುವಿನ ನಿಮಿತ್ತವಾಗಿಯೂ ಪವಿತ್ರಾತ್ಮನು
ನಮಗೆ ಕೊಡುವ ಪ್ರೀತಿಯ ನಿಮಿತ್ತವಾಗಿಯೂ ನೀವು
ಪ್ರಾರ್ಥಿಸಿರಿ. 31ಜುದೇಯದಲ್ಲಿರುವ ಅವಿಶ್ವಾಸಿಗಳ ಕೈಯಿಂದ
ನಾನು ಪಾರಾಗುವಂತೆ ಪ್ರಾರ್ಥಿಸಿರಿ. ನಾನು ಜೆರುಸಲೇಮಿಗೆ
ತೆಗೆದುಕೊಂಡು ಹೋಗುತ್ತಿರುವ ಈ ಸಹಾಯಧನವು ಅಲ್ಲಿ
ರುವ ದೇವಮಕ್ಕಳಿಗೆ ಮೆಚ್ಚಿಕೆಯಾಗುವಂತೆ ಪ್ರಾರ್ಥಿಸಿರಿ.
32ಅನಂತರ, ದೇವರು ಬಯಸುವುದಾದರೆ ನಾನು ನಿಮ್ಮ ಬಳಿಗೆ
ಬರುತ್ತೇನೆ. ನಾನು ಸಂತೋಷದಿಂದ ಬಂದು ನಿಮ್ಮ ಸಂಗಡ
ವಿದ್ದು ವಿಶ್ರಾಂತಿಯನ್ನು ಪಡೆಯುತ್ತೇನೆ. 33ಶಾಂತಿಯನ್ನು
ಕೊಡುವ ದೇವರು ನಿಮ್ಮೆಲ್ಲರೊಂದಿಗಿರಲಿ. ಆಮೆನ್.

## ಪೌಲನ ಕೊನೆ ಮಾತುಗಳು

16 ಕ್ರಿಸ್ತನಲ್ಲಿ ನಮ್ಮ ಸಹೋದರಿಯಾದ ಫೊಯಿಬೆ
ಯನ್ನು ನಾನು ನಿಮಗೆ ಶಿಫಾರಸು ಮಾಡಲಿಚ್ಛಿಸು
ತ್ತೇನೆ. ಈಕೆಯು ಕೆಂಕ್ರೆಯ ಪಟ್ಟಣದ ಸಭೆಯಲ್ಲಿ ವಿಶೇಷ
ಸಹಾಯಕಳಾಗಿದ್ದಾಳೆ. 2ನೀವು ಆಕೆಯನ್ನು ಪ್ರಭುವಿನ ಹೆಸರಿ
ನಲ್ಲಿ ಸ್ವೀಕರಿಸಿಕೊಳ್ಳಬೇಕೆಂದು ನಾನು ನಿಮ್ಮನ್ನು ಕೇಳಿಕೊಳ್ಳು
ತ್ತೇನೆ. ದೇವಜನರಿಗೆ ತಕ್ಕಂತೆ ಈಕೆಯನ್ನು ಸ್ವೀಕರಿಸಿಕೊಳ್ಳಿರಿ.
ಆಕೆಗೆ ಬೇಕಾದ ಸಹಾಯಗಳನ್ನೆಲ್ಲಾ ಮಾಡಿರಿ. ಆಕೆಯು ನನಗೆ
ಬಹಳವಾಗಿ ಸಹಾಯ ಮಾಡಿದ್ದಾಳೆ. ಅಲ್ಲದೆ ಇತರ ಅನೇಕ
ಜನರಿಗೂ ಆಕೆ ಸಹಾಯ ಮಾಡಿದ್ದಾಳೆ.

3ಪ್ರಿಸ್ಕಿಲ್ಲಳಿಗೂ ಅಕ್ವಿಲನಿಗೂ ನನ್ನ ವಂದನೆ ತಿಳಿಸಿರಿ. ಅವರು
ಕ್ರಿಸ್ತ ಯೇಸುವಿನಲ್ಲಿ ನನ್ನೊಂದಿಗೆ ಸೇವೆ ಮಾಡುತ್ತಿದ್ದಾರೆ.
4ಅವರು ನನ್ನ ಪ್ರಾಣವನ್ನು ಉಳಿಸುವುದಕ್ಕಾಗಿ ತಮ್ಮ ಪ್ರಾಣ
ಗಳನ್ನೇ ಅಪಾಯಕ್ಕೆ ಈಡುಮಾಡಿದರು. ನಾನು ಅವರಿಗೆ ಕೃತಜ್ಞ
ನಾಗಿದ್ದೇನೆ. ಯೆಹೂದ್ಯರಲ್ಲದ ಸಭೆಗಳವರೆಲ್ಲರೂ ಅವರಿಗೆ
ಕೃತಜ್ಞರಾಗಿದ್ದಾರೆ. 5ಅಲ್ಲದೆ ಅವರ ಮನೆಯಲ್ಲಿ ಸೇರಿಬರುವ
ಸಭೆಯವರಿಗೂ ನನ್ನ ವಂದನೆಗಳನ್ನು ತಿಳಿಸಿರಿ.

ನನ್ನ ಪ್ರಿಯ ಸ್ನೇಹಿತನಾದ ಎಪ್ಪೈನೆತನಿಗೆ ನನ್ನ ವಂದನೆ
ತಿಳಿಸಿರಿ. ಏಷ್ಯಾದಲ್ಲಿ ಕ್ರಿಸ್ತನನ್ನು ಹಿಂಬಾಲಿಸಿದವರಲ್ಲಿ ಅವನೇ
ಮೊಟ್ಟಮೊದಲನೆಯವನಾಗಿದ್ದಾನೆ. 6ಮರಿಯಳಿಗೆ ನನ್ನ
ವಂದನೆ ತಿಳಿಸಿರಿ. ಆಕೆ ನಿಮಗೋಸ್ಕರ ಬಹು ಕಷ್ಟಪಟ್ಟು ಕೆಲಸ
ಮಾಡಿದಳು. 7ಆಂದ್ರೋನಿಕನಿಗೆ ಮತ್ತು ಯೂನ್ಯನಿಗೆ ನನ್ನ
ವಂದನೆ ತಿಳಿಸಿರಿ. ಅವರು ನನ್ನ ಸಂಬಂಧಿಕರಾಗಿದ್ದಾರೆ. ಅಲ್ಲದೆ
ಅವರು ನನ್ನೊಂದಿಗೆ ಸೆರೆಮನೆಯಲ್ಲಿದ್ದರು. ದೇವರ ಅತ್ಯಂತ
ಮುಖ್ಯ ಸೇವಕರುಗಳಲ್ಲಿ* ಅವರೂ ಸೇರಿದ್ದಾರೆ. ಅವರು
ನನಗಿಂತ ಮೊದಲೇ ಕ್ರಿಸ್ತನ ವಿಶ್ವಾಸಿಗಳಾಗಿದ್ದಾರೆ. 8ಪ್ರಭುವಿ
ನಲ್ಲಿ ನನ್ನ ಪ್ರಿಯ ಸ್ನೇಹಿತನಾದ ಅಂಪ್ಲಿಯಾತನಿಗೆ ನನ್ನ ವಂದನೆ
ತಿಳಿಸಿರಿ. 9ಉರ್ಬಾನನಿಗೆ ನನ್ನ ವಂದನೆ ತಿಳಿಸಿರಿ. ಅವನು ಕ್ರಿಸ್ತನಿ
ಗೋಸ್ಕರ ನನ್ನ ಸಹೋದ್ಯೋಗಿಯಾಗಿದ್ದಾನೆ. ನನ್ನ ಪ್ರಿಯ
ಗೆಳೆಯನಾದ ಸ್ತಾಖುನಿಗೆ ನನ್ನ ವಂದನೆ ತಿಳಿಸಿರಿ. 10ಅಪೆಲ್ಲನಿಗೆ
ನನ್ನ ವಂದನೆ ತಿಳಿಸಿರಿ. ಅವನು ಕ್ರಿಸ್ತನನ್ನು ನಿಜವಾಗಿಯೂ ಪ್ರೀತಿ
ಸುತ್ತಾನೆಂಬುದನ್ನು ಪರೀಕ್ಷಿಸಿ ನಿರೂಪಿಸಲಾಗಿದೆ. ಅರಿಸ್ತೊ
ಬೂಲನ ಕುಟುಂಬದಲ್ಲಿ ಇರುವವರಿಗೆಲ್ಲ ನನ್ನ ವಂದನೆ ತಿಳಿಸಿರಿ.
11ನನ್ನ ಸಂಬಂಧಿಕರಾದ ಹೆರೋಡಿಯೊನನಿಗೂ ಪ್ರಭುವಿಗೆ
ಸೇರಿದವನಾದ ನಾರ್ಕಿಸ್ಸನ ಕುಟುಂಬದಲ್ಲಿರುವವರೆಲ್ಲರಿಗೂ
ನನ್ನ ವಂದನೆ ತಿಳಿಸಿರಿ. 12ತ್ರುಫೈನಳಿಗೂ ತ್ರುಫೋಸಳಿಗೂ ನನ್ನ
ವಂದನೆ ತಿಳಿಸಿರಿ. ಅವರು ಪ್ರಭುವಿಗಾಗಿ ಬಹು ಕಷ್ಟಪಟ್ಟು ಸೇವೆ
ಮಾಡುತ್ತಿದ್ದಾರೆ. ನನ್ನ ಪ್ರಿಯ ಸಹೋದರಿಯಾದ ಪೆರ್ಸೀಸ
ಳಿಗೂ ನನ್ನ ವಂದನೆ ತಿಳಿಸಿರಿ. ಆಕೆಯು ಸಹ ಪ್ರಭುವಿಗೋಸ್ಕರ
ಬಹು ಕಷ್ಟಪಟ್ಟು ಸೇವೆ ಮಾಡಿದಳು. 13ರೂಫನಿಗೆ ನನ್ನ ವಂದನೆ
ತಿಳಿಸಿರಿ. ಅವನು ಪ್ರಭುವಿನಲ್ಲಿ ವಿಶೇಷವಾದ ವ್ಯಕ್ತಿ. ಅವನ
ತಾಯಿಗೂ ನನ್ನ ವಂದನೆ ತಿಳಿಸಿರಿ. ಆಕೆ ನನ್ನನ್ನು ಸ್ವಂತ ಮಗನಂತೆ
ನೋಡಿಕೊಂಡಳು. 14ಅಸುಂಕ್ರಿತನಿಗೂ ಪ್ಲೆಗೋನನಿಗೂ
ಹೆರ್ಮೇಯನಿಗೂ ಪತ್ರೋಬನಿಗೂ ಹೆರ್ಮಾನನಿಗೂ ಮತ್ತು
ಅವರೊಂದಿಗಿರುವ ಎಲ್ಲಾ ಕ್ರೈಸ್ತ ಸಹೋದರರಿಗೂ
15ಫಿಲೊಲೋಗನಿಗೂ ಯೂಲ್ಯಳಿಗೂ ನೇರ್ಯನಿಗೂ ಅವನ
ಸಹೋದರಿಗೂ ಮತ್ತು ಒಲುಂಪನಿಗೂ ಮತ್ತು ಅವರೊಂದಿ
ಗಿರುವ ಎಲ್ಲಾ ಭಕ್ತರಿಗೆ ನನ್ನ ವಂದನೆ ತಿಳಿಸಿರಿ. 16ನೀವು ಪರಸ್ಪರ
ಸಂಧಿಸುವಾಗ ಪವಿತ್ರವಾದ ಮುದ್ದನ್ನಿಟ್ಟು ವಂದಿಸಿರಿ. ಕ್ರಿಸ್ತನ
ಸಭೆಗಳವರೆಲ್ಲಾ ನಿಮಗೆ ವಂದನೆ ತಿಳಿಸುತ್ತಾರೆ.

17ಸಹೋದರ ಸಹೋದರಿಯರೇ, ನಿಮ್ಮಲ್ಲಿ ಒಡಕು
ಗಳನ್ನು ಉಂಟುಮಾಡುವ ಜನರ ವಿಷಯದಲ್ಲಿ ನೀವು ಬಹು
ಜಾಗ್ರತೆಯಿಂದ ಇರಬೇಕೆಂದು ನಾನು ನಿಮ್ಮನ್ನು ಕೇಳಿಕೊಳ್ಳು

---

**ಅತ್ಯಂತ ಮುಖ್ಯ ಸೇವಕರು** ಅಕ್ಷರಶಃ, ''ಅಪೊಸ್ತಲರಲ್ಲಿ ಪ್ರಮುಖ
ರಾದವರು.''

ತ್ತೇನೆ. ಇತರ ಜನರ ನಂಬಿಕೆಯನ್ನು ಕೆಡಿಸುವಂಥ ಜನರ ಬಗ್ಗೆ ಬಹು ಎಚ್ಚರದಿಂದಿರಿ. ನೀವು ಕಲಿತಿರುವ ಉಪದೇಶಕ್ಕೆ ಅವರು ವಿರುದ್ಧವಾಗಿದ್ದಾರೆ. ನೀವು ಅವರಿಂದ ದೂರವಿರಿ. [18]ಅಂಥ ಜನರು ನಮ್ಮ ಪ್ರಭುವಾದ ಕ್ರಿಸ್ತನ ಸೇವೆ ಮಾಡುತ್ತಿಲ್ಲ. ಅವರು ಕೇವಲ ತಮ್ಮ ಸುಖಕ್ಕಾಗಿ ಈ ಕಾರ್ಯಗಳನ್ನು ಮಾಡುತ್ತಿದ್ದಾರೆ. ಕೆಟ್ಟದ್ದರ ಬಗ್ಗೆ ತಿಳಿದಿಲ್ಲದ ಜನರ ಮನಸ್ಸುಗಳನ್ನು ಮೋಸ ಗೊಳಿಸುವುದಕ್ಕಾಗಿ ಅವರು ನಯನಾಜೂಕಿನ ನುಡಿಗಳ ನ್ನಾಡುತ್ತಾರೆ ಮತ್ತು ಮುಖಸ್ತುತಿಯ ಮಾತುಗಳನ್ನಾಡುತ್ತಾರೆ.
[19]ನಿಮ್ಮ ವಿಧೇಯತ್ವವು ಎಲ್ಲಾ ವಿಶ್ವಾಸಿಗಳಿಗೆ ತಿಳಿದಿದೆ. ಆದ್ದರಿಂದ ನಿಮ್ಮ ವಿಷಯದಲ್ಲಿ ನಾನು ಬಹು ಸಂತೋಷಪಡುತ್ತೇನೆ. ಆದರೆ ಒಳ್ಳೆಯ ಸಂಗತಿಗಳ ಬಗ್ಗೆ ನೀವು ವಿವೇಕಿಗಳಾಗಿರಬೇಕೆಂದು ಮತ್ತು ಕೆಟ್ಟಸಂಗತಿಗಳ ಬಗ್ಗೆ ಏನೂ ತಿಳಿದಿಲ್ಲದವರಾಗಿರಬೇಕೆಂದು ನಾನು ಅಪೇಕ್ಷಿಸುತ್ತೇನೆ.

[20]ಶಾಂತಿಯನ್ನು ಕೊಡುವ ದೇವರು ಬೇಗನೆ ಸೈತಾನನನ್ನು ಸೋಲಿಸಿ, ಅವನ ಮೇಲೆ ನಿಮಗೆ ಅಧಿಕಾರವನ್ನು ಕೊಡುವನು.

ನಮ್ಮ ಪ್ರಭುವಾದ ಯೇಸುವಿನ ಕೃಪೆಯು ನಿಮ್ಮೊಂದಿಗಿರಲಿ.

[21]ನನ್ನ ಸಹೋದ್ಯೋಗಿಯಾದ ತಿಮೋಥೆಯನು ಮತ್ತು ನನ್ನ ಸಂಬಂಧಿಕರಾದ ಲೂಕ್ಯ, ಯಾಸೋನ ಮತ್ತು ಸೋಸಿಪತ್ರ ನಿಮಗೆ ವಂದನೆ ತಿಳಿಸಿದ್ದಾರೆ.

[22]ಪೌಲನು ಹೇಳುತ್ತಿರುವ ಸಂಗತಿಗಳನ್ನು ಬರೆಯುತ್ತಿರುವ ತೆರ್ತ್ಯನೆಂಬ ನಾನು ನಿಮ್ಮನ್ನು ಪ್ರಭುವಿನಲ್ಲಿ ವಂದಿಸುತ್ತೇನೆ.

[23]ಗಾಯನು ನನಗೆ ಆತಿಥಿಸತ್ಕಾರ ಮಾಡುತ್ತಿದ್ದಾನೆ. ಅಲ್ಲದೆ ಸಭಾಕೂಟಕ್ಕಾಗಿ ಅವನ ಮನೆಯನ್ನೇ ಉಪಯೋಗಿಸಲಾಗುತ್ತಿದೆ. ಅವನು ಸಹ ನಿಮಗೆ ವಂದನೆ ತಿಳಿಸುತ್ತಾನೆ. ಈ ಪಟ್ಟಣದ ಖಜಾಂಚಿಯಾದ ಎರಸ್ತನು ಮತ್ತು ಸಹೋದರನಾದ ಕ್ವರ್ತನು ನಿಮಗೆ ವಂದನೆ ತಿಳಿಸುತ್ತಾರೆ. [24]* [25]ದೇವರಿಗೆ ಮಹಿಮೆಯಾಗಲಿ. ನಿಮ್ಮನ್ನು ನಂಬಿಕೆಯಲ್ಲಿ ಬಲಗೊಳಿಸ ಬಲ್ಲಾತನು ದೇವರೊಬ್ಬನೇ. ನಾನು ಉಪದೇಶಿಸುವ ಸುವಾರ್ತೆಯ ಮೂಲಕ ದೇವರು ನಿಮ್ಮನ್ನು ಬಲಗೊಳಿಸಬಲ್ಲನು. ನಾನು ಯೇಸು ಕ್ರಿಸ್ತನ ಬಗ್ಗೆ ಜನರಿಗೆ ತಿಳಿಸುತ್ತಿರುವುದೇ ಆ ಸುವಾರ್ತೆ. ದೇವರು ತಿಳಿಯಪಡಿಸಿದ ಆ ಸುವಾರ್ತೆಯು ಗುಪ್ತವಾದ ಸತ್ಯವಾಗಿತ್ತು ಮತ್ತು ಆರಂಭದಿಂದಲೂ ಮರೆಯಾಗಿತ್ತು.
[26]ಆದರೆ ಗುಪ್ತವಾದ ಆ ಸತ್ಯವನ್ನು ಈಗ ನಮಗೆ ತೋರಿಸಲಾಗಿದೆ. ಮತ್ತು ಆ ಸತ್ಯವನ್ನು ಎಲ್ಲಾ ಜನರಿಗೆ ತಿಳಿಸಲಾಗಿದೆ. ದೇವರು ಆಜ್ಞಾಪಿಸಿರುವುದು ಇದನ್ನೇ. ಎಲ್ಲಾ ಜನರು ನಂಬಿಕೊಂಡು ದೇವರಿಗೆ ವಿಧೇಯರಾಗಲೆಂದು ಗುಪ್ತವಾದ ಈ ಸತ್ಯವನ್ನು ಎಲ್ಲಾ ಜನರಿಗೆ ತಿಳಿಸಲಾಗಿದೆ. ದೇವರು ಸದಾಕಾಲ ಜೀವಿಸುತ್ತಾನೆ. [27]ಜ್ಞಾನಿಯಾದ ದೇವರೊಬ್ಬನಿಗೆ ಯೇಸು ಕ್ರಿಸ್ತನ ಮೂಲಕ ಎಂದೆಂದಿಗೂ ಮಹಿಮೆ ಉಂಟಾಗಲಿ. ಆಮೆನ್.

---

**ವಚನ 24** ಕೆಲವು ಗ್ರೀಕ್ ಪ್ರತಿಗಳಲ್ಲಿ 24ನೇ ವಚನವನ್ನು ಸೇರಿಸಲಾಗಿದೆ: ‘‘ನಮ್ಮ ಪ್ರಭುವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮೆಲ್ಲರೊಂದಿಗಿರಲಿ’’ ಆಮೆನ್.

# ಕೊರಿಂಥದವರಿಗೆ ಬರೆದ ಮೊದಲನೆ ಪತ್ರ

1 ಪೌಲನು ಬರೆಯುತ್ತಿರುವ ಪತ್ರ. ಕ್ರಿಸ್ತಯೇಸುವಿನ
ಅಪೊಸ್ತಲನಾಗುವುದಕ್ಕೆ ನಾನು ದೇವರ ಚಿತ್ತಾನುಸಾರ
ವಾಗಿ ಕರೆಯಲ್ಪಟ್ಟೆನು. ನಾನು ಈ ಪತ್ರವನ್ನು ಕ್ರಿಸ್ತನಲ್ಲಿ ನಮ್ಮ
ಸಹೋದರನಾದ ಸೊಸ್ಥೆನನೊಂದಿಗೆ ಬರೆಯುತ್ತಿದ್ದೇನೆ.
2ಕ್ರಿಸ್ತಯೇಸುವಿನಲ್ಲಿ ಪವಿತ್ರರಾಗಿ ಮಾಡಲ್ಪಟ್ಟಿರುವ
ಕೊರಿಂಥದ ದೇವರ ಸಭೆಯವರಿಗೆ ಈ ಪತ್ರವನ್ನು ಬರೆಯು
ತ್ತಿದ್ದೇನೆ. ನೀವು ದೇವರ ಪವಿತ್ರ ಜನರಾಗುವುದಕ್ಕೆ ಕರೆಯ
ಲ್ಪಟ್ಟಿದ್ದೀರಿ. ಪ್ರಭುವಾದ ಯೇಸು ಕ್ರಿಸ್ತನ ಹೆಸರಿನಲ್ಲಿ ನಂಬಿಕೆ
ಇಡುವ ಎಲ್ಲಾ ಜನರೊಂದಿಗೆ ನೀವು ಕರೆಯಲ್ಪಟ್ಟಿದ್ದೀರಿ.
ಯೇಸು ಕ್ರಿಸ್ತನು ಅವರಿಗೂ ನಮಗೂ ಪ್ರಭುವಾಗಿದ್ದಾನೆ.
3ನಮ್ಮ ತಂದೆಯಾದ ದೇವರಿಂದಲೂ ಪ್ರಭುವಾದ ಯೇಸು
ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ದೊರೆಯಲಿ.

### ಪೌಲನು ದೇವರಿಗೆ ಸಲ್ಲಿಸುವ ಕೃತಜ್ಞತಾಸ್ತುತಿ

4ದೇವರು ಕ್ರಿಸ್ತಯೇಸುವಿನ ಮೂಲಕ ನಿಮಗೆ ಕೊಟ್ಟಿರುವ
ಕೃಪೆಯ ನಿಮಿತ್ತವಾಗಿ ನಾನು ನಿಮಗೋಸ್ಕರ ದೇವರಿಗೆ
ಯಾವಾಗಲೂ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. 5ಯೇಸುವಿನಲ್ಲಿ
ಸಕಲ ಆಶೀರ್ವಾದಗಳನ್ನು ಹೊಂದಿರುವ ನೀವು ವಾಕ್ಚತುರರೂ
ಜ್ಞಾನ ಸಂಪನ್ನರೂ ಆಗಿದ್ದೀರಿ. 6ಕ್ರಿಸ್ತನ ವಿಷಯವಾದ ಸತ್ಯವು
ನಿಮ್ಮಲ್ಲಿ ನಿರೂಪಿಸಲ್ಪಟ್ಟಿದೆ. 7ಹೀಗಿರಲು, ನಮ್ಮ ಪ್ರಭುವಾದ
ಯೇಸು ಕ್ರಿಸ್ತನ ಪುನರಾಗಮನವನ್ನು ಎದುರುನೋಡುತ್ತಿರುವ
ನೀವು ದೇವರಿಂದ ಬರುವ ಪ್ರತಿಯೊಂದು ವರವನ್ನು ಹೊಂದಿ
ದವರಾಗಿದ್ದೀರಿ. 8ಯೇಸುವು ನಿಮ್ಮನ್ನು ಕೊನೆಯವರೆಗೂ
ದೃಢಪಡಿಸಿ ಕಾಪಾಡುವನು. ನಮ್ಮ ಪ್ರಭುವಾದ ಯೇಸು ಕ್ರಿಸ್ತನು
ಮತ್ತೆ ಬಂದಾಗ ನೀವು ನಿರ್ದೋಷಿಗಳಾಗಿರುವಿರಿ. 9ದೇವರು
ನಂಬಿಗಸ್ತನಾಗಿದ್ದಾನೆ. ದೇವರ ಮಗನಾದ ಮತ್ತು ಪ್ರಭುವಾದ
ಯೇಸು ಕ್ರಿಸ್ತನ ಜೀವದಲ್ಲಿ ಪಾಲುಹೊಂದಬೇಕೆಂದು ನಮ್ಮನ್ನು
ಕರೆದಿರುವಾತನು ದೇವರೇ.

### ಕೊರಿಂಥ ಸಭೆಯಲ್ಲಿ ಸಮಸ್ಯೆಗಳು

10ಸಹೋದರ ಸಹೋದರಿಯರೇ, ನಮ್ಮ ಪ್ರಭುವಾದ
ಯೇಸು ಕ್ರಿಸ್ತನ ಹೆಸರಿನಲ್ಲಿ ನಾನು ನಿಮ್ಮನ್ನು ಬೇಡಿಕೊಳ್ಳುವು
ದೇನಂದರೆ, ವಾದವಿವಾದವಿಲ್ಲದೆ ಭಿನ್ನಭೇದಗಳಿಲ್ಲದೆ ಒಂದೇ
ಮನಸ್ಸಿನಿಂದಲೂ ಒಂದೇ ಉದ್ದೇಶದಿಂದಲೂ ನೀವು ಐಕ್ಯ
ಮತ್ಯದಿಂದ ಬಾಳಿರಿ. 11ನನ್ನ ಸಹೋದರ ಸಹೋದರಿಯರೇ,
ಖ್ಲೋಯೆಯ ಮನೆಯಿಂದ ಬಂದಿದ್ದ ಕೆಲವರು ನಿಮ್ಮ ಬಗ್ಗೆ ನನಗೆ
ಹೇಳಿದರು. ನಿಮ್ಮ ಮಧ್ಯದಲ್ಲಿ ವಾಗ್ವಾದಗಳಿರುವುದಾಗಿ ನನಗೆ
ತಿಳಿಯಿತು. 12ಅಂದರೆ, ನಿಮ್ಮಲ್ಲಿ ಒಬ್ಬನು, ‘‘ನಾನು ಪೌಲನನ್ನು
ಹಿಂಬಾಲಿಸುತ್ತೇನೆ’’ ಎಂದು ಹೇಳುತ್ತಾನೆ; ಮತ್ತೊಬ್ಬನು,
‘‘ನಾನು ಅಪೊಲ್ಲೋಸನನ್ನು ಹಿಂಬಾಲಿಸುತ್ತೇನೆ’’ ಎಂದು
ಹೇಳುತ್ತಾನೆ. ಇನ್ನೊಬ್ಬನು, ‘‘ನಾನು ಕೇಫನನ್ನು (ಪೇತ್ರನನ್ನು)
ಹಿಂಬಾಲಿಸುತ್ತೇನೆ’’ ಎಂದು ಹೇಳುತ್ತಾನೆ. ಮತ್ತೊಬ್ಬನು,
‘‘ನಾನು ಕ್ರಿಸ್ತನನ್ನು ಹಿಂಬಾಲಿಸುತ್ತೇನೆ’’ ಎಂದು ಹೇಳುತ್ತಾನೆ.
13ಕ್ರಿಸ್ತನು ವಿಭಾಗವಾಗಿದ್ದಾನೊ? ಪೌಲನು ನಿಮಗೋಸ್ಕರ
ಶಿಲುಬೆಯ ಮೇಲೆ ಸತ್ತನೇ? ಇಲ್ಲ! ನೀವು ಪೌಲನ ಹೆಸರಿನಲ್ಲಿ
ದೀಕ್ಷಾಸ್ನಾನ ಮಾಡಿಸಿಕೊಂಡಿರೊ? ಇಲ್ಲ! 14ನಿಮ್ಮಲ್ಲಿ ಕ್ರಿಸ್ಪನು
ಮತ್ತು ಗಾಯನು ಇವರ ಹೊರತು ಬೇರೆ ಯಾರಿಗೂ ನಾನು
ದೀಕ್ಷಾಸ್ನಾನ ಮಾಡಿಸಿಲ್ಲವಾದ್ದರಿಂದ ದೇವರಿಗೆ ಸ್ತೋತ್ರ ಸಲ್ಲಿಸು
ತ್ತೇನೆ.
15ನನ್ನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಂಡಿರು
ವುದಾಗಿ ಹೇಳಲು ನಿಮ್ಮಲ್ಲಿ ಯಾರಿಗೂ ಈಗ ಸಾಧ್ಯವಿಲ್ಲವಾದ್ದ
ರಿಂದ ನಾನು ದೇವರಿಗೆ ಸ್ತೋತ್ರ ಸಲ್ಲಿಸುತ್ತೇನೆ. 16(ಸ್ತೆಫನನ
ಮನೆಯವರಿಗಲ್ಲದೆ ಬೇರೆ ಯಾರಿಗೂ ದೀಕ್ಷಾಸ್ನಾನ ಮಾಡಿಸಿ
ದಂತೆ ನನಗೆ ತೋರುವುದಿಲ್ಲ.) 17ಕ್ರಿಸ್ತನು ನನ್ನನ್ನು ಕಳುಹಿಸಿರು
ವುದು ದೀಕ್ಷಾಸ್ನಾನವನ್ನು ಕೊಡುವುದಕ್ಕಲ್ಲ, ಸುವಾರ್ತೆಯನ್ನು
ತಿಳಿಸುವುದಕ್ಕಾಗಿಯಷ್ಟೆ. ಆದರೆ ವಾಕ್ಚಾತುರ್ಯದಿಂದ ಸಾರು
ವುದಕ್ಕಾಗಿ ಕಳುಹಿಸಲಿಲ್ಲ. ನಾನೇನಾದರೂ ಲೋಕಜ್ಞಾನ
ದಿಂದ ಸುವಾರ್ತೆ ಸಾರಿದ್ದೇಯಾದರೆ, ಕ್ರಿಸ್ತನ ಶಿಲುಬೆಯೇ
ನಿರರ್ಥಕವಾಗುವುದು.

### ದೇವರ ಶಕ್ತಿ ಮತ್ತು ಕ್ರಿಸ್ತನ ಜ್ಞಾನ

18ನಾಶನ ಮಾರ್ಗದಲ್ಲಿರುವ ಜನರಿಗೆ ಶಿಲುಬೆಯ
ಉಪದೇಶವು ಮೂರ್ಖತನವಾಗಿದೆ. ಆದರೆ ರಕ್ಷಣೆಯ ಮಾರ್ಗ
ದಲ್ಲಿರುವ ನಮಗಾದರೋ ಅದು ದೇವರ ಶಕ್ತಿಯಾಗಿದೆ.
19ಪವಿತ್ರ ಗ್ರಂಥದಲ್ಲಿ ಹೀಗೆ ಬರೆಯಲ್ಪಟ್ಟಿದೆ:

> ‘‘ಜ್ಞಾನಿಗಳ ಜ್ಞಾನವನ್ನು ನಾಶಮಾಡುವೆನು.
> ಬುದ್ಧಿವಂತರ ಬುದ್ಧಿಯನ್ನು ಬೆಲೆಬಾಳದಂತೆ
> ಮಾಡುವೆನು.’’
>
> *ಯೆಶಾಯ 29:14*

20ಜ್ಞಾನಿಯು ಎಲ್ಲಿದ್ದಾನೆ? ವಿದ್ಯಾವಂತನು ಎಲ್ಲಿದ್ದಾನೆ? ಈ
ಕಾಲದ ತತ್ವಜ್ಞಾನಿಯು ಎಲ್ಲಿದ್ದಾನೆ? ದೇವರು ಲೋಕದ
ಜ್ಞಾನವನ್ನು ಮೂರ್ಖತನವನ್ನಾಗಿ ಮಾಡಿದ್ದಾನೆ. 21ಇದು
ದೇವರ ಜ್ಞಾನದ ಸಂಕಲ್ಪವಾಗಿತ್ತು. ಲೋಕವು ತನ್ನ ಸ್ವಂತ
ಜ್ಞಾನದ ಮೂಲಕವಾಗಿ ದೇವರನ್ನು ತಿಳಿದುಕೊಂಡಿರಲಿಲ್ಲ.

ಆದ್ದರಿಂದ ಮೂರ್ಖತನದಂತೆ ತೋರುವ ಸಂದೇಶದ ಮೂಲಕ
ನಂಬುವವರನ್ನು ರಕ್ಷಿಸುವುದು ದೇವರಿಗೆ ಒಳ್ಳೆಯದೆನಿಸಿತು.
22ಯೆಹೂದ್ಯರು ಸೂಚಕ ಕಾರ್ಯಗಳನ್ನು ಕೇಳುತ್ತಾರೆ.
ಗ್ರೀಕರಿಗೆ ಜ್ಞಾನವು ಬೇಕಾಗಿದೆ. 23ನಾವಾದರೋ, ಶಿಲುಬೆ
ಗೇರಿಸಲ್ಪಟ್ಟ ಕ್ರಿಸ್ತನ ಕುರಿತಾಗಿ ಬೋಧಿಸುತ್ತೇವೆ. ಇದು
ಯೆಹೂದ್ಯರಿಗೆ ದೊಡ್ಡ ಸಮಸ್ಯೆಯಾಗಿದೆ; ಯೆಹೂದ್ಯರಲ್ಲದ
ಜನರಿಗೆ ಮೂರ್ಖತನದಂತೆ ತೋರುತ್ತದೆ.

24ದೇವರಿಂದ ಕರೆಯಲ್ಪಟ್ಟಿರುವ ಜನರು ಯೆಹೂದ್ಯ
ರಾಗಿದ್ದರೂ ಯೆಹೂದ್ಯರಲ್ಲದವರಾಗಿದ್ದರೂ ಅವರಿಗೆ ಕ್ರಿಸ್ತನು
ದೇವರ ಶಕ್ತಿಯಾಗಿದ್ದಾನೆ; ಮತ್ತು ದೇವರ ಜ್ಞಾನವಾಗಿದ್ದಾನೆ.
25ದೇವರ ಮೂಢತನವು ಸಹ ಮನುಷ್ಯರ ಜ್ಞಾನಕ್ಕಿಂತಲೂ
ಶ್ರೇಷ್ಠವಾಗಿದೆ. ದೇವರ ಬಲಹೀನತೆಯು ಸಹ ಮನುಷ್ಯರ
ಬಲಕ್ಕಿಂತಲೂ ಹೆಚ್ಚು ಶಕ್ತಿಯುತವಾಗಿದೆ.

26ಸಹೋದರ ಸಹೋದರಿಯರೇ, ದೇವರು ನಿಮ್ಮನ್ನು
ಕರೆದಾಗ ನೀವು ಹೇಗಿದ್ದಿರಿ ಎಂದು ಜ್ಞಾಪಿಸಿಕೊಳ್ಳಿರಿ. ಲೋಕದ
ಎಣಿಕೆಯಲ್ಲಿ ನಿಮ್ಮಲ್ಲಿ ಅನೇಕರು ಜ್ಞಾನಿಗಳಾಗಿರಲಿಲ್ಲ; ಅಧಿ
ಕಾರಿಗಳಾಗಿರಲಿಲ್ಲ; ಪ್ರಾಮುಖ್ಯವಾದ ಕುಟುಂಬಗಳಿಗೆ ಸೇರಿ
ದವರಾಗಿರಲಿಲ್ಲ. 27ಆದರೆ ದೇವರು ಈ ಲೋಕದ ಜ್ಞಾನಿಗಳನ್ನು
ನಾಚಿಕೆಪಡಿಸುವುದಕ್ಕಾಗಿ ಮೂಢರನ್ನೂ ಬಲಿಷ್ಠರನ್ನು ನಾಚಿಕೆ
ಪಡಿಸುವದಕ್ಕಾಗಿ ಬಲಹೀನರನ್ನೂ ಆರಿಸಿಕೊಂಡಿದ್ದಾನೆ.
28ಲೋಕವು ಯಾವುದನ್ನು ಮುಖ್ಯವಲ್ಲವೆಂದು ಯೋಚಿಸು
ತ್ತದೆಯೊ ಯಾವುದನ್ನು ದ್ವೇಷಿಸುತ್ತದೆಯೊ ಮತ್ತು ನಿಷ್ಪ್ರ
ಯೋಜಕವೆಂದು ಪರಿಗಣಿಸುತ್ತದೆಯೊ ಅದನ್ನು ದೇವರು ಆರಿಸಿ
ಕೊಂಡನು. ಲೋಕವು ಯಾವುದನ್ನು ಮುಖ್ಯವೆಂದು ಯೋಚಿ
ಸುತ್ತದೊ ಅದನ್ನು ನಾಶಪಡಿಸಲು ದೇವರು ಹೀಗೆ ಮಾಡಿದನು.
29ಹೀಗಿರಲು ದೇವರ ಮುಂದೆ ಹೆಮ್ಮೆಪಡಲು ಯಾರಿಗೂ
ಆಸ್ಪದವಿಲ್ಲ. 30ನಿಮ್ಮನ್ನು ಕ್ರಿಸ್ತಯೇಸುವಿನಲ್ಲಿ ಒಂದು ಭಾಗ
ವನ್ನಾಗಿ ಮಾಡಿದಾತನು ದೇವರೇ. ಕ್ರಿಸ್ತನು ನಮಗಾಗಿ ದೇವ
ರಿಂದ ಬಂದ ಜ್ಞಾನವಾಗಿದ್ದಾನೆ. ನಾವು ನೀತಿವಂತರಾಗಿರು
ವುದಕ್ಕೆ ಪಾಪದಿಂದ ಬಿಡುಗಡೆಯಾಗಿರುವುದಕ್ಕೆ ಮತ್ತು ಪವಿತ್ರ
ರಾಗಿರುವುದಕ್ಕೆ ಕ್ರಿಸ್ತನೇ ಕಾರಣನಾಗಿದ್ದಾನೆ.

31ಆದ್ದರಿಂದ ಪವಿತ್ರ ಗ್ರಂಥವು ಹೇಳುವಂತೆ, ‘‘ಹೆಮ್ಮೆಪಡು
ವವನು ಪ್ರಭುವಿನಲ್ಲಿ ಮಾತ್ರ ಹೆಮ್ಮೆಪಡಬೇಕು.’’ *

## ಶಿಲುಬೆಗೇರಿಸಲ್ಪಟ್ಟ ಕ್ರಿಸ್ತನ ಕುರಿತಾದ ಸಂದೇಶ

2 ಪ್ರಿಯ ಸಹೋದರ ಸಹೋದರಿಯರೇ, ನಾನು ನಿಮ್ಮ
ಬಳಿಗೆ ಬಂದಿದ್ದಾಗ, ನಾನು ನಿಮಗೆ ದೇವರ ಸತ್ಯವನ್ನು
ತಿಳಿಸಿದೆನು. ಆದರೆ ನಾನು ನಾಜೂಕಾದ ಪದಗಳನ್ನಾಗಲಿ ಮಹಾ
ಜ್ಞಾನವನ್ನಾಗಲಿ ಉಪಯೋಗಿಸಲಿಲ್ಲ. 2ನಾನು ನಿಮ್ಮೊಂದಿ
ಗಿದ್ದಾಗ ಯೇಸು ಕ್ರಿಸ್ತನ ಮತ್ತು ಆತನ ಶಿಲುಬೆಯ ಮೇಲಿನ
ಮರಣವನ್ನೇ ಹೊರತು ಬೇರೆಲ್ಲಾ ವಿಷಯಗಳನ್ನು ಮರೆತು
ಬಿಡಲು ನಿರ್ಧರಿಸಿದೆನು. 3ನಾನು ನಿಮ್ಮ ಬಳಿಗೆ ಬಂದಿದ್ದಾಗ
ಬಲಹೀನನಾಗಿದ್ದೆನು; ಭಯದಿಂದ ನಡುಗುತ್ತಿದ್ದೆನು. 4ನನ್ನ
ಉಪದೇಶವಾಗಲಿ ಮಾತುಕತೆಯಾಗಲಿ ಜನರನ್ನು ಒತ್ತಾಯಿಸು
ವಂಥ ಜ್ಞಾನವಾಕ್ಯಗಳನ್ನು ಒಳಗೊಂಡಿರಲಿಲ್ಲ. ಆದರೆ
ಪವಿತ್ರಾತ್ಮನು ಕೊಡುವ ಶಕ್ತಿಯೇ ನನ್ನ ಉಪದೇಶಕ್ಕೆ ಆಧಾರ
ವಾಗಿತ್ತು. 5ನಿಮ್ಮ ನಂಬಿಕೆಯು ಮನುಷ್ಯನ ಜ್ಞಾನದ ಮೇಲೆ
ಆಧಾರಗೊಂಡಿರದೆ ದೇವರ ಶಕ್ತಿಯ ಮೇಲೆ ಆಧಾರಗೊಂಡಿರ
ಬೇಕೆಂದು ನಾನು ಹೀಗೆ ಮಾಡಿದೆನು.

## ದೇವರ ಜ್ಞಾನ

6ಪರಿಣತರಾದ ಜನರಿಗೆ ನಾವು ಜ್ಞಾನವನ್ನೇ ಉಪದೇಶಿಸು
ತ್ತೇವೆ. ಇದು ಇಹಲೋಕದ ಜ್ಞಾನವೂ ಅಲ್ಲ. ಅಧಿಪತಿಗಳ
ಜ್ಞಾನವೂ ಅಲ್ಲ. ಈ ಲೋಕದ ಅಧಿಪತಿಗಳು ತಮ್ಮ ಅಧಿಕಾರ
ವನ್ನು ಕಳೆದುಕೊಳ್ಳುವವರಾಗಿದ್ದಾರೆ. 7ನಾವಾದರೊ ದೇವರ
ರಹಸ್ಯವಾದ ಜ್ಞಾನವನ್ನೇ ಹೇಳುತ್ತೇವೆ. ಈ ಜ್ಞಾನವನ್ನು ಜನರಿಗೆ
ಮರೆಮಾಡಲಾಗಿದೆ. ದೇವರು ನಮ್ಮ ಮಹಿಮೆಗಾಗಿ ಈ ಜ್ಞಾನ
ವನ್ನು ಲೋಕವು ಆರಂಭವಾಗುವುದಕ್ಕಿಂತ ಮೊದಲೇ ಯೋಜಿ
ಸಿದ್ದನು.

8ಈ ಲೋಕದ ಯಾವ ಅಧಿಪತಿಗಳೂ ಈ ಜ್ಞಾನವನ್ನು
ಅರ್ಥಮಾಡಿಕೊಳ್ಳಲಿಲ್ಲ. ಅವರು ಅರ್ಥಮಾಡಿಕೊಂಡಿದ್ದರೆ,
ಅವರು ಮಹಿಮೆಯುಳ್ಳ ಪ್ರಭುವನ್ನು ಶಿಲುಬೆಗೇರಿಸುತ್ತಿರಲಿಲ್ಲ.
9ಪವಿತ್ರ ಗ್ರಂಥದಲ್ಲಿ ಬರೆದಿರುವಂತೆಯೇ ಇದಾಯಿತು:

> ‘‘ದೇವರು ತನ್ನನ್ನು ಪ್ರೀತಿಸುವ ಜನರಿಗೆ
> ಸಿದ್ಧಪಡಿಸಿರುವುದನ್ನು ಯಾವ ಕಣ್ಣೂ ಕಾಣಲಿಲ್ಲ;
> ಯಾವ ಕಿವಿಯೂ ಕೇಳಲಿಲ್ಲ. ಯಾವ ವ್ಯಕ್ತಿಯೂ
> ಊಹಿಸಿಕೊಳ್ಳಲಿಲ್ಲ.’’
>
> *ಯೆಶಾಯ 64:4*

10ಆದರೆ ದೇವರು ತನ್ನ ಪವಿತ್ರಾತ್ಮನ ಮೂಲಕ ನಮಗೆ ಈ
ಸಂಗತಿಗಳನ್ನು ಪ್ರಕಟಿಸಿದನು.

ಪವಿತ್ರಾತ್ಮನು ಸಕಲವನ್ನೂ ದೇವರ ಅಗಾಧವಾದ ರಹಸ್ಯ
ಗಳನ್ನೂ ತಿಳಿದಿದ್ದಾನೆ. 11ಇದು ಹೇಗಂದರೆ: ಒಬ್ಬನ ಆಲೋಚನೆ
ಗಳು ಅವನ ಆಂತರ್ಯದಲ್ಲಿರುವ ಜೀವಾತ್ಮವೊಂದಕ್ಕೆ ಹೊರತು
ಬೇರೆ ಯಾರಿಗೂ ತಿಳಿದಿರುವುದಿಲ್ಲ. ಅಂತೆಯೇ, ದೇವರ
ಆಲೋಚನೆಗಳು ದೇವರಾತ್ಮನ ಹೊರತು ಬೇರೆ ಯಾರಿಗೂ
ತಿಳಿದಿರುವುದಿಲ್ಲ.12ನಾವು ಹೊಂದಿಕೊಂಡ್ಡದ್ದು ದೇವರಿಂದ
ಬಂದ ಪವಿತ್ರಾತ್ಮನನ್ನೇ ಹೊರತು ಪ್ರಾಪಂಚಿಕವಾದ ಆತ್ಮ
ವನ್ನಲ್ಲ. ದೇವರು ನಮಗೆ ಉಚಿತವಾಗಿ ಕೊಟ್ಟಿರುವಂಥವು
ಗಳನ್ನು ತಿಳಿದುಕೊಳ್ಳುವುದಕ್ಕಾಗಿ ನಾವು ಆತನನ್ನು ಹೊಂದಿ
ಕೊಂಡೆವು. 13ನಾವು ಈ ಸಂಗತಿಗಳನ್ನು ಹೇಳುವಾಗ ಮನುಷ್ಯರ
ಜ್ಞಾನದಿಂದ ಕಲಿತುಕೊಂಡಿರುವ ವಾಕ್ಯಗಳನ್ನು ಉಪಯೋಗಿ
ಸದೆ ಆತ್ಮನಿಂದ ಕಲಿತುಕೊಂಡ ವಾಕ್ಯಗಳನ್ನೇ ಉಪಯೋಗಿಸು
ತ್ತೇವೆ. ಆತ್ಮಿಕ ಸಂಗತಿಗಳನ್ನು ವಿವರಿಸಲು ಆತ್ಮಿಕ ಪದಗಳನ್ನೇ
ಬಳಸುತ್ತೇವೆ. 14ಆತ್ಮಿಕನಲ್ಲದ ವ್ಯಕ್ತಿಯು ದೇವರಾತ್ಮನ ವಿಷಯ
ಗಳನ್ನು ಸ್ವೀಕರಿಸಿಕೊಳ್ಳುವುದಿಲ್ಲ. ಅವನು ಆ ವಿಷಯಗಳನ್ನು
ಮೂರ್ಖತನವೆಂದು ಯೋಚಿಸುತ್ತಾನೆ. ಅವನು ಪವಿತ್ರಾತ್ಮನ
ವಿಷಯಗಳನ್ನು ಅರ್ಥಮಾಡಿಕೊಳ್ಳಲಾರನು; ಏಕೆಂದರೆ ಆ
ವಿಷಯಗಳನ್ನು ಆತ್ಮಿಕವಾಗಿ ವಿಚಾರಣೆ ಮಾಡಲು ಮಾತ್ರ ಸಾಧ್ಯ.
15ಆದರೆ ಆತ್ಮಿಕ ಮನುಷ್ಯನು ಎಲ್ಲಾ ವಿಷಯಗಳ ಬಗ್ಗೆ ತೀರ್ಪು
ಮಾಡಬಲ್ಲನು. ಅವನಿಗೆ ಬೇರೆಯಾರೂ ತೀರ್ಪು ನೀಡಲಾಗು
ವುದಿಲ್ಲ. ಪವಿತ್ರ ಗ್ರಂಥವು ಹೇಳುವಂತೆ:

---

**ಹೆಮ್ಮೆ… ಪಡಬೇಕು** ಯೆರೆಮೀಯ 9:24.

16 ‘‘ಪ್ರಭುವಿನ ಮನಸ್ಸನ್ನು ಯಾರು ಬಲ್ಲರು?
ಪ್ರಭುವಿಗೆ ಯಾರು ಉಪದೇಶ ಮಾಡ
ಬಲ್ಲರು?’’
*ಯೆಶಾಯ 40:13*

ನಾವಾದರೋ ಕ್ರಿಸ್ತನ ಮನಸ್ಸನ್ನು ಹೊಂದಿದವರಾಗಿದ್ದೇವೆ.

## ಮನುಷ್ಯರನ್ನು ಅನುಸರಿಸುವುದು ತಪ್ಪು

3 ಸಹೋದರ ಸಹೋದರಿಯರೇ, ನಾನು ಆತ್ಮಿಕ ಜನ
ರೊಂದಿಗೆ ಮಾತಾಡುವಂತೆ ಮೊದಲು ನಿಮ್ಮೊಂದಿಗೆ
ಮಾತಾಡಲಾಗಲಿಲ್ಲ. ಪ್ರಾಪಂಚಿಕರೂ ಕ್ರಿಸ್ತನಲ್ಲಿ ಎಳೆಕೂಸು
ಗಳೂ ಆಗಿರುವಂಥವರೊಂದಿಗೆ ಮಾತಾಡುವಂತೆ ನಾನು
ನಿಮ್ಮೊಂದಿಗೆ ಮಾತಾಡಬೇಕಾಯಿತು. 2 ನಾನು ನಿಮಗೆ ಮಾಡಿದ
ಉಪದೇಶವು ಗಟ್ಟಿಯಾದ ಆಹಾರದಂತಿರದೆ ಹಾಲಿನಂತಿತ್ತು;
ಏಕೆಂದರೆ ಗಟ್ಟಿಯಾದ ಆಹಾರವನ್ನು ತೆಗೆದುಕೊಳ್ಳಲು
ನೀವಿನ್ನೂ ಸಿದ್ಧರಾಗಿರಲಿಲ್ಲ. ಈಗಲೂ ಸಹ ಗಟ್ಟಿಯಾದ ಆಹಾರ
ವನ್ನು ತೆಗೆದುಕೊಳ್ಳಲು ನೀವು ಸಿದ್ಧರಾಗಿಲ್ಲ. 3 ನೀವಿನ್ನೂ ಆತ್ಮಿಕ
ರಾದ ಜನರಾಗಿಲ್ಲ. ನಿಮ್ಮ ನಡುವೆ ಹೊಟ್ಟೆಕಿಚ್ಚಿದೆ; ವಾಗ್ವಾದ
ಗಳಿವೆ; ಜಗಳಗಳಿವೆ. ನೀವು ಆತ್ಮಿಕರಲ್ಲವೆಂಬುದನ್ನು ಇವು
ಸೂಚಿಸುತ್ತವೆ. ನೀವು ಲೋಕದ ಜನರಂತೆಯೇ ವರ್ತಿಸು
ತ್ತಿದ್ದೀರಿ. 4 ನಿಮ್ಮಲ್ಲಿ ಒಬ್ಬನು, ‘‘ನಾನು ಪೌಲನನ್ನು ಹಿಂಬಾಲಿಸು
ತ್ತೇನೆ’’ ಎನ್ನುತ್ತಾನೆ. ಮತ್ತೊಬ್ಬನು ‘‘ನಾನು ಅಪೊಲ್ಲೋಸನನ್ನು
ಹಿಂಬಾಲಿಸುತ್ತೇನೆ’’ ಎನ್ನುತ್ತಾನೆ. ನೀವು ಹೀಗೆ ವಾಗ್ವಾದ ಮಾಡು
ವಾಗ ಲೋಕದ ಜನರಂತೆಯೇ ವರ್ತಿಸುವವರಾಗಿದ್ದೀರಿ.

5 ಅಪೊಲ್ಲೋಸನು ಮುಖ್ಯವಾದವನೇ? ಇಲ್ಲ! ಪೌಲನು
ಮುಖ್ಯವಾದವನೇ? ಇಲ್ಲ! ನೀವು ನಂಬಿಕೊಳ್ಳಲು ಸಹಾಯ
ಮಾಡುವ ನಾವು ಕೇವಲ ದೇವರ ಸೇವಕರಾಗಿದ್ದೇವೆ. ದೇವರು
ನಮಗೆ ಕೊಟ್ಟ ಕೆಲಸವನ್ನು ನಮ್ಮಲ್ಲಿ ಪ್ರತಿಯೊಬ್ಬರೂ
ಮಾಡಿದೆವು. 6 ನಾನು ಬೀಜವನ್ನು ಬಿತ್ತಿದೆನು; ಅಪೊಲ್ಲೋಸನು
ನೀರನ್ನು ಹಾಕಿದನು. ಆದರೆ ಬೀಜವನ್ನು ಬೆಳೆಯಿಸಿದವನು
ದೇವರೇ.

7 ಆದ್ದರಿಂದ ಬೀಜ ಬಿತ್ತುವವನಾಗಲಿ ನೀರು ಹಾಕು
ವವನಾಗಲಿ ಮುಖ್ಯನಲ್ಲ. ದೇವರೊಬ್ಬನು ಮಾತ್ರ ಮುಖ್ಯವಾದ
ವನು, ಏಕೆಂದರೆ ಬೀಜಗಳನ್ನು ಬೆಳೆಯಿಸುವವನು ಆತ
ನೊಬ್ಬನೇ. 8 ಬೀಜ ಬಿತ್ತುವವನ ಮತ್ತು ನೀರನ್ನು ಹಾಕುವವನ
ಉದ್ದೇಶವು ಒಂದೇ ಆಗಿದೆ. ಮತ್ತು ಪ್ರತಿಯೊಬ್ಬನಿಗೂ
ಅವನವನ ಕೆಲಸಕ್ಕೆ ತಕ್ಕ ಪ್ರತಿಫಲ ದೊರೆಯುವುದು. 9 ನಾವು
ದೇವರ ಜೊತೆ ಕೆಲಸದವರಾಗಿದ್ದೇವೆ. ನೀವು ದೇವರ
ಹೊಲವಾಗಿದ್ದೀರಿ.

ಇದಲ್ಲದೆ ನೀವು ದೇವರ ಕಟ್ಟಡವಾಗಿದ್ದೀರಿ. 10 ದೇವರು
ನನಗೆ ಕೊಟ್ಟ ವರದಾನಗಳನ್ನು ಉಪಯೋಗಿಸಿ ಚತುರ
ಶಿಲ್ಪಿಯಂತೆ ನಾನು ಆ ಮನೆಗೆ ಅಸ್ತಿವಾರವನ್ನು ಹಾಕಿದೆನು. ಇತರ
ಜನರು ಆ ಅಸ್ತಿವಾರದ ಮೇಲೆ ಕಟ್ಟುತ್ತಿದ್ದಾರೆ. ಆದರೆ
ಪ್ರತಿಯೊಬ್ಬ ವ್ಯಕ್ತಿಯು ತಾನು ಹೇಗೆ ಕಟ್ಟುತ್ತಿದ್ದಾನೆ ಎಂಬುದರ
ಬಗ್ಗೆ ಎಚ್ಚರದಿಂದಿರಬೇಕು. 11 ಅಸ್ತಿವಾರವನ್ನು ಆಗಲೇ ಹಾಕ
ಲಾಗಿದೆ. ಆ ಅಸ್ತಿವಾರವು ಯೇಸು ಕ್ರಿಸ್ತನೇ. ಆ ಅಸ್ತಿವಾರ
ವನ್ನಲ್ಲದೆ ಬೇರೊಂದು ಅಸ್ತಿವಾರವನ್ನು ಬೇರೆ ಯಾರೂ
ಹಾಕಲಾರರು. 12 ಒಬ್ಬ ವ್ಯಕ್ತಿಯು ಆ ಅಸ್ತಿವಾರದ ಮೇಲೆ ಚಿನ್ನ,
ಬೆಳ್ಳಿ, ರತ್ನ, ಮರ, ಹುಲ್ಲು ಮತ್ತು ಜೊಂಡುಗಳಿಂದ ಕಟ್ಟ
ಬಹುದು. 13 ಆದರೆ ಪ್ರತಿಯೊಬ್ಬನ ಕೆಲಸವು ಸ್ಪಷ್ಟವಾಗಿ ಕಾಣು
ವುದು; ಏಕೆಂದರೆ, ಕ್ರಿಸ್ತನು ಬರುವ ದಿನವು ಅದನ್ನು ಸ್ಪಷ್ಟಪಡಿಸು
ವುದು. ಆ ದಿನವು ಬೆಂಕಿಯೊಂದಿಗೆ ಉದಯಿಸುವುದು. ಆ
ಬೆಂಕಿಯು ಪ್ರತಿಯೊಬ್ಬ ವ್ಯಕ್ತಿಯ ಕೆಲಸವನ್ನು ಪರೀಕ್ಷಿಸುವುದು.
14 ಅಸ್ತಿವಾರದ ಮೇಲೆ ಕಟ್ಟಿದ ಕಟ್ಟಡವು ಸ್ಥಿರವಾಗಿದ್ದರೆ,
ಕಟ್ಟಿದವನು ಪ್ರತಿಫಲವನ್ನು ಹೊಂದಿಕೊಳ್ಳುವನು. 15 ಆದರೆ
ಕಟ್ಟಡವು ಸುಟ್ಟುಹೋದರೆ, ಕಟ್ಟಿದವನಿಗೆ ನಷ್ಟವಾಗುವುದು.
ಅವನು ರಕ್ಷಣೆ ಹೊಂದುವನು, ಆದರೂ ಅವನು ಬೆಂಕಿಯಿಂದ
ತಪ್ಪಿಸಿಕೊಂಡವನಂತಿರುವನು.

16 ನೀವೇ ದೇವರ ಆಲಯವಾಗಿದ್ದೀರಿ. ಇದು ನಿಮಗೆ
ಚೆನ್ನಾಗಿ ತಿಳಿದಿದೆ. ದೇವರಾತ್ಮನು ನಿಮ್ಮೊಳಗೆ ವಾಸವಾಗಿದ್ದಾನೆ.
17 ಯಾವನಾದರೂ ದೇವರ ಆಲಯವನ್ನು ನಾಶಮಾಡಿದರೆ
ದೇವರು ಅವನನ್ನು ನಾಶಮಾಡುವನು. ಏಕೆಂದರೆ ದೇವರ
ಆಲಯವು ಪರಿಶುದ್ಧವಾದದ್ದು. ನೀವೇ ದೇವರ ಆಲಯ
ವಾಗಿದ್ದೀರಿ.

18 ನಿಮಗೆ ನೀವೇ ಮೋಸಮಾಡಿಕೊಳ್ಳಬೇಡಿ. ನಿಮ್ಮಲ್ಲಿ
ರುವ ಯಾವನಾದರೂ ತಾನು ಈ ಲೋಕದಲ್ಲಿ ಜ್ಞಾನಿಯೆಂದು
ಆಲೋಚಿಸಿಕೊಂಡರೆ ಅವನು ಮೂಢನಾಗಲೇಬೇಕು. ಆಗ ಆ
ವ್ಯಕ್ತಿಯು ನಿಜವಾಗಿಯೂ ಜ್ಞಾನಿಯಾಗಬಲ್ಲನು. 19 ಏಕೆಂದರೆ
ಈ ಲೋಕದ ಜ್ಞಾನವು ದೇವರಿಗೆ ಮೂರ್ಖತನವಾಗಿದೆ.
‘‘ದೇವರು ಜಾಣರನ್ನು ಅವರ ಕುತಂತ್ರದ ಮಾರ್ಗಗಳಲ್ಲೇ
ಹಿಡಿದುಕೊಳ್ಳುವನು’’ * ಎಂದು ಪವಿತ್ರ ಗ್ರಂಥದಲ್ಲಿ ಬರೆಯ
ಲಾಗಿದೆ.

20 ‘‘ಪ್ರಭುವು ಜ್ಞಾನಿಗಳ ಆಲೋಚನೆಗಳನ್ನು ತಿಳಿದಿದ್ದಾನೆ.
ಅವರ ಆಲೋಚನೆಗಳು ನಿಷ್ಪ್ರಯೋಜಕವೆಂದು ಆತನಿಗೆ
ಗೊತ್ತಿದೆ’’ * ಎಂದು ಸಹ ಪವಿತ್ರ ಗ್ರಂಥದಲ್ಲಿ ಬರೆಯಲ್ಪಟ್ಟಿದೆ.
21 ಆದ್ದರಿಂದ ನೀವು ಜನರ ಬಗ್ಗೆ ಹೆಚ್ಚಳಪಡಬಾರದು.
ಸಮಸ್ತವೂ ನಿಮ್ಮದೇ. 22 ಪೌಲ, ಅಪೊಲ್ಲೋಸ್ ಮತ್ತು ಕೇಫ
ನಿಮ್ಮವರಾಗಿದ್ದಾರೆ. ಜಗತ್ತು, ಜೀವ, ಮರಣ ಮತ್ತು ವರ್ತಮಾನ
ಹಾಗೂ ಭವಿಷತ್ ಕಾಲಗಳ ಸಂಗತಿಗಳು ನಿಮ್ಮವೇ. 23 ನೀವು
ಕ್ರಿಸ್ತನಿಗೆ ಸೇರಿದವರಾಗಿದ್ದೀರಿ. ಕ್ರಿಸ್ತನು ದೇವರಿಗೆ ಸೇರಿದವ
ನಾಗಿದ್ದಾನೆ.

## ಕ್ರಿಸ್ತನ ಅಪೊಸ್ತಲರು

4 ಜನರು ನಮ್ಮನ್ನು ಕ್ರಿಸ್ತನ ಸೇವಕರೆಂತಲೂ ದೇವರು ತನ್ನ
ಗುಪ್ತವಾದ ಸತ್ಯಗಳನ್ನು ನಮಗೆ ವಹಿಸಿಕೊಟ್ಟಿದ್ದಾ
ನೆಂತಲೂ ಎಣಿಸಬೇಕು. 2 ಹೀಗಿರಲು, ಜವಾಬ್ದಾರಿಕೆಯನ್ನು
ವಹಿಸಿಕೊಂಡವರು ತಾವು ತಮ್ಮ ಕೆಲಸದಲ್ಲಿ ನಂಬಿಗಸ್ತರೆಂಬು
ದನ್ನು ತೋರಿಸಬೇಕು. 3 ನೀವೇ ನನಗೆ ವಿಚಾರಣೆ ಮಾಡಿದರೂ
ಯಾವುದೇ ಮಾನವ ನಿಯಮಿತ ನ್ಯಾಯಾಲಯದಲ್ಲಿ ನನಗೆ
ವಿಚಾರಣೆಯಾದರೂ ನಾನು ಚಿಂತಿಸುವುದಿಲ್ಲ. ಅಲ್ಲದೆ ನನಗೆ
ನಾನೇ ವಿಚಾರಣೆ ಮಾಡಿಕೊಳ್ಳುವುದಿಲ್ಲ. 4 ನಾನು ತಪ್ಪುಮಾಡಿ

---

**ದೇವರು .. ಹಿಡಿದುಕೊಳ್ಳುವನು** ಯೋಬ 5:13.

**ಪ್ರಭುವು ... ಗೊತ್ತಿದೆ** ಕೀರ್ತನೆ 94:11

ದ್ದೇನೆಂದು ನನ್ನ ಮನಸಾಕ್ಷಿಗೆ ತೋರುತ್ತಿಲ್ಲ. ಅದು ನನ್ನನ್ನು
ನಿರ್ದೋಷಿಯನ್ನಾಗಿ ಮಾಡಲಾರದು. ನನಗೆ ನ್ಯಾಯ
ನಿರ್ಣಯ ಮಾಡುವವನು ಪ್ರಭುವೊಬ್ಬನೇ. [5]ಆದ್ದರಿಂದ ಸರಿ
ಯಾದ ಸಮಯಕ್ಕಿಂತ ಮೊದಲೇ ತೀರ್ಪುಮಾಡಬೇಡಿ.
ಪ್ರಭುವು ಬರುವತನಕ ಕಾದುಕೊಂಡಿರಿ. ಕತ್ತಲೆಯಲ್ಲಿ ಅಡಗಿ
ಕೊಂಡಿರುವವುಗಳ ಮೇಲೆ ಆತನು ಬೆಳಕನ್ನು ಬೆಳಗಿಸುವನು.
ಮನುಷ್ಯರ ಹೃದಯಗಳ ರಹಸ್ಯವಾದ ಉದ್ದೇಶಗಳನ್ನು ಆತನು
ಬಹಿರಂಗಪಡಿಸುವನು. ಆಗ ಪ್ರತಿಯೊಬ್ಬನಿಗೂ ಬರತಕ್ಕ
ಹೊಗಳಿಕೆಯು ದೇವರಿಂದಲೇ ಬರುವುದು.

[6]ಸಹೋದರ ಸಹೋದರಿಯರೇ, ನಾನು ನಿಮಗೋಸ್ಕರ
ಈ ವಿಷಯಗಳಲ್ಲಿ ಅಪೊಲ್ಲೋಸನನ್ನು ಮತ್ತು ನನ್ನನ್ನು
ಉದಾಹರಿಸಿದ್ದೇನೆ. ಏಕೆಂದರೆ, ''ಬರೆಯಲ್ಪಟ್ಟಿರುವ ನಿಯಮ
ಗಳನ್ನು ಮಾತ್ರ ಅನುಸರಿಸು'' ಎಂಬ ವಾಕ್ಯದ ಅರ್ಥವನ್ನು ನೀವು
ನಮ್ಮಿಂದ ಕಲಿತುಕೊಳ್ಳಬೇಕು. ಆಗ ನೀವು ಒಬ್ಬನ ವಿಷಯದಲ್ಲಿ
ಹೆಚ್ಚಳಪಟ್ಟು ಮತ್ತೊಬ್ಬನನ್ನು ದ್ವೇಷಿಸುವುದಿಲ್ಲ. [7]ನಿಮ್ಮನ್ನು
ಇತರ ಜನರಿಗಿಂತಲೂ ಉತ್ತಮರೆಂದು ಯಾರು ಹೇಳುತ್ತಾರೆ?
ನಿಮ್ಮಲ್ಲಿರುವ ಪ್ರತಿಯೊಂದನ್ನೂ ದೇವರೇ ನಿಮಗೆ ಕೊಟ್ಟಿದ್ದಾನೆ.
ಹೀಗಿರುವಾಗ, ನಿಮ್ಮ ಸ್ವಂತ ಶಕ್ತಿಯಿಂದ ಅವುಗಳನ್ನು ಪಡೆದು
ಕೊಂಡವರಂತೆ ಏಕೆ ಜಂಬಕೊಚ್ಚಿಕೊಳ್ಳುವಿರಿ?

[8]ನಿಮಗೆ ಅಗತ್ಯವಾದ ಪ್ರತಿಯೊಂದು ನಿಮಗಿದೆಯೆಂದು
ನೀವು ಭಾವಿಸಿಕೊಂಡಿದ್ದೀರಿ. ನೀವು ನಿಮ್ಮನ್ನು ಐಶ್ವರ್ಯವಂತ
ರೆಂದೂ ರಾಜರುಗಳೆಂದೂ ಭಾವಿಸಿಕೊಂಡಿದ್ದೀರಿ. ನೀವು ನಿಜ
ವಾಗಿಯೂ ರಾಜರುಗಳಾಗಿದ್ದರೆ ನನಗೆ ಎಷ್ಟೋ ಸಂತೋಷ
ವಾಗುತ್ತಿತ್ತು. ಆಗ ನಾವೂ ನಿಮ್ಮೊಂದಿಗೆ ರಾಜರುಗಳಾಗು
ತ್ತಿದ್ದೆವು. [9]ಆದರೆ ದೇವರು ನನಗೂ ಉಳಿದ ಅಪೊಸ್ತಲರಿಗೂ
ಕಡೆಯ ಸ್ಥಾನವನ್ನು ಕೊಟ್ಟಿದ್ದಾನೆಂದು ನನಗೆ ತೋರುತ್ತದೆ.
ಜನರೆಲ್ಲರ ಎದುರಿನಲ್ಲಿ ನಾವು ಮರಣದಂಡನೆಗೆ ಗುರಿಯಾ
ದಂಥವರಾಗಿದ್ದೇವೆ. ನಾವು ದೇವದೂತರಿಗೂ ಮನುಷ್ಯರಿಗೂ
ಒಟ್ಟಿನಲ್ಲಿ ಇಡೀ ಜಗತ್ತಿಗೇ ನೋಟವಾಗಿದ್ದೇವೆ. [10]ನಾವು ಕ್ರಿಸ್ತನಿ
ಗೋಸ್ಕರ ಮೂರ್ಖರಾಗಿದ್ದೇವೆ. ಆದರೆ ನೀವು ನಿಮ್ಮನ್ನು ಕ್ರಿಸ್ತ
ನಲ್ಲಿ ಬಹು ಜ್ಞಾನಿಗಳೆಂದು ಭಾವಿಸಿಕೊಂಡಿದ್ದೀರಿ. ನಾವು ಬಲ
ಹೀನರಾಗಿದ್ದೇವೆ, ಆದರೆ ನೀವು ನಿಮ್ಮನ್ನು ಬಲಿಷ್ಠರೆಂದು
ಭಾವಿಸಿಕೊಂಡಿದ್ದೀರಿ. ಜನರು ನಿಮಗೆ ಗೌರವವನ್ನು ಕೊಡು
ತ್ತಾರೆ; ನಮಗಾದರೋ ಅವರು ಗೌರವವನ್ನು ಕೊಡುವುದಿಲ್ಲ.
[11]ಈಗಲೂ ಸಹ ನಾವು ಹಸಿದವರಾಗಿದ್ದೇವೆ; ಬಾಯಾರಿದವ
ರಾಗಿದ್ದೇವೆ; ಧರಿಸಿಕೊಳ್ಳಲು ಸಾಕಷ್ಟು ಬಟ್ಟೆಯಿಲ್ಲದವ
ರಾಗಿದ್ದೇವೆ. ಆಗಾಗ್ಗೆ ನಮಗೆ ಪೆಟ್ಟುಗಳು ಬೀಳುತ್ತಿರುತ್ತವೆ;
ನಮಗೆ ಮನೆಗಳೂ ಇಲ್ಲ. [12]ನಾವು ಊಟಕ್ಕಾಗಿ ನಮ್ಮ ಕೈಯಾರೆ
ಕಷ್ಟಪಟ್ಟು ದುಡಿಯುತ್ತೇವೆ. ಜನರು ನಮ್ಮನ್ನು ಶಪಿಸುತ್ತಾರೆ,
ನಾವಾದರೋ ಅವರನ್ನು ಆಶೀರ್ವದಿಸುತ್ತೇವೆ. ಜನರು ನಮಗೆ
ಹಿಂಸೆಕೊಟ್ಟರೂ ತಾಳಿಕೊಳ್ಳುತ್ತೇವೆ. [13]ಜನರು ನಮ್ಮ ಬಗ್ಗೆ ಕೆಟ್ಟ
ವಿಷಯಗಳನ್ನು ಮಾತಾಡುತ್ತಾರೆ. ನಾವಾದರೋ ಅವರಿಗೆ
ಒಳ್ಳೆಯ ವಿಷಯಗಳನ್ನು ಹೇಳುತ್ತೇವೆ. ಇಂದಿನವರೆಗೂ ಜನರು
ನಮ್ಮನ್ನು ಲೋಕದ ಕಸವೊ ಭೂಮಿಯ ಹೊಲಸೊ ಎಂಬಂತೆ
ಪರಿಗಣಿಸಿದ್ದಾರೆ.

[14]ನಿಮ್ಮನ್ನು ನಾಚಿಕೆಪಡಿಸುವುದಕ್ಕಾಗಿ ನಾನು ಪ್ರಯತ್ನಿ
ಸುತ್ತಿಲ್ಲ. ಆದರೆ ನೀವು ನನ್ನ ಪ್ರಿಯ ಮಕ್ಕಳಾಗಿರುವುದರಿಂದ
ನಿಮ್ಮನ್ನು ಎಚ್ಚರಿಸುವುದಕ್ಕಾಗಿ ಈ ಸಂಗತಿಗಳನ್ನು ಬರೆಯು
ತ್ತಿದ್ದೇನೆ. [15]ನಿಮಗೆ ಕ್ರಿಸ್ತನಲ್ಲಿ ಹತ್ತು ಸಾವಿರ ಮಂದಿ ಉಪದೇಶಕ
ರಿರಬಹುದು, ಆದರೆ ಅನೇಕ ತಂದೆಗಳು ಇಲ್ಲ. ಸುವಾರ್ತೆಯ
ಮೂಲಕವಾಗಿ ಕ್ರಿಸ್ತ ಯೇಸುವಿನಲ್ಲಿ ನಾನೇ ನಿಮಗೆ ಆತ್ಮಿಕ
ತಂದೆಯಾಗಿದ್ದೇನೆ. [16]ಆದ್ದರಿಂದ ನೀವು ನನ್ನಂತೆಯೇ ಇರ
ಬೇಕೆಂದು ನಾನು ನಿಮ್ಮನ್ನು ಬೇಡಿಕೊಳ್ಳುತ್ತೇನೆ. [17]ಆದ
ಕಾರಣವೇ, ನಾನು ನಿಮ್ಮ ಬಳಿಗೆ ತಿಮೊಥೆಯನನ್ನು ಕಳುಹಿಸು
ತ್ತಿದ್ದೇನೆ, ಅವನು ಪ್ರಭುವಿನಲ್ಲಿ ನನ್ನ ಮಗನಾಗಿದ್ದಾನೆ. ನಾನು
ಅವನನ್ನು ಪ್ರೀತಿಸುತ್ತೇನೆ. ಅವನು ನಂಬಿಗಸ್ತನಾಗಿದ್ದಾನೆ. ನಾನು
ಕ್ರಿಸ್ತ ಯೇಸುವಿನಲ್ಲಿ ಜೀವಿಸುವ ರೀತಿಯನ್ನು ಅವನು ನಿಮ್ಮ
ಜ್ಞಾಪಕಕ್ಕೆ ತರುವನು. ಪ್ರತಿಯೊಂದು ಕಡೆಯಲ್ಲಿಯೂ ಎಲ್ಲಾ
ಸಭೆಗಳಲ್ಲಿಯೂ ನಾನು ಅದೇ ರೀತಿಯ ಜೀವನವನ್ನು
ಉಪದೇಶಿಸುತ್ತೇನೆ.

[18]ನಿಮ್ಮಲ್ಲಿ ಕೆಲವರು ಜಂಬಕೊಚ್ಚಿಕೊಳ್ಳುತ್ತಿದ್ದಾರೆ. ನಾನು
ನಿಮ್ಮ ಬಳಿಗೆ ಮತ್ತೆ ಬರುವುದಿಲ್ಲವೆಂದು ಯೋಚಿಸಿ, ನೀವು
ಜಂಬಪಡುತ್ತಿದ್ದೀರಿ. [19]ಆದರೆ ನಾನು ಬಹು ಬೇಗನೆ ನಿಮ್ಮ
ಬಳಿಗೆ ಬರುತ್ತೇನೆ. ಪ್ರಭುವಿನ ಚಿತ್ತವಾದರೆ, ನಾನು ಬಂದು
ಜಂಬಕೊಚ್ಚಿಕೊಳ್ಳುವವರು ಹೇಳುವ ಮಾತನ್ನಲ್ಲ, ಅವರು
ಏನು ಮಾಡಬಲ್ಲರೆಂಬುದನ್ನು ಗೊತ್ತುಮಾಡಿಕೊಳ್ಳುವೆನು.
[20]ಏಕೆಂದರೆ ದೇವರ ರಾಜ್ಯವು ಕೇವಲ ಮಾತಲ್ಲ, ಅದು ಶಕ್ತಿ
ಯಾಗಿದೆ. [21]ನೀವು ಯಾವುದನ್ನು ಇಷ್ಟಪಡುತ್ತೀರಿ?

ನಾನು ಬೆತ್ತವನ್ನು ತೆಗೆದುಕೊಂಡು ಬರಬೇಕೇ? ಅಥವಾ
ಪ್ರೀತಿ ಮತ್ತು ಸೌಮ್ಯಭಾವಗಳಿಂದ ಕೂಡಿದವನಾಗಿ ಬರ
ಬೇಕೇ?

### ಸಭೆಯಲ್ಲಿ ನೈತಿಕ ಸಮಸ್ಯೆ

5 ನಿಮ್ಮ ಮಧ್ಯದಲ್ಲಿ ಲೈಂಗಿಕ ಪಾಪವಿದೆಯೆಂದು ಜನರು
ನಿಜವಾಗಿಯೂ ಹೇಳುತ್ತಿದ್ದಾರೆ. ದೇವರನ್ನು ತಿಳಿದಿಲ್ಲದ
ಜನರ ನಡುವೆಯೂ ಇಲ್ಲದಂಥ ಕೆಟ್ಟ ಬಗೆಯ ಲೈಂಗಿಕ ಪಾಪ
ಅದಾಗಿದೆ. ನಿಮ್ಮಲ್ಲಿ ಒಬ್ಬನು ತನ್ನ ತಂದೆಯ ಪತ್ನಿಯನ್ನೇ ಇಟ್ಟು
ಕೊಂಡಿದ್ದಾನೆಂದು ಜನರು ಹೇಳುತ್ತಿದ್ದಾರೆ. [2]ಆದರೆ ನೀವು
ನಿಮ್ಮ ವಿಷಯದಲ್ಲಿ ಇನ್ನೂ ಹೆಚ್ಚಳಪಡುತ್ತಿದ್ದೀರಿ. ನೀವು ದುಃಖ
ಭರಿತರಾಗಿರಬೇಕಿತ್ತು. ಆ ಪಾಪ ಮಾಡಿದ ವ್ಯಕ್ತಿಯನ್ನು ನಿಮ್ಮ
ಸಭೆಯಿಂದ ಹೊರಗೆ ಹಾಕಬೇಕಿತ್ತು. [3]ನನ್ನ ದೇಹ ನಿಮ್ಮೊಂದಿಗೆ
ಇಲ್ಲದಿದ್ದರೂ ನಾನು ಆತ್ಮದಲ್ಲಿ ನಿಮ್ಮೊಂದಿಗಿದ್ದೇನೆ. ಆ ಪಾಪ
ಮಾಡಿದ ವ್ಯಕ್ತಿಗೆ ನಾನು ಆಗಲೇ ತೀರ್ಪು ಮಾಡಿದ್ದೇನೆ. ನಾನು
ಅಲ್ಲಿದ್ದಿದ್ದರೆ ಯಾವ ತೀರ್ಪನ್ನು ಕೊಡುತ್ತಿದ್ದೆನೊ ಅದೇ
ತೀರ್ಪನ್ನು ಕೊಟ್ಟಿದ್ದೇನೆ. [4]ನಮ್ಮ ಪ್ರಭುವಾದ ಯೇಸುವಿನ
ಹೆಸರಿನಲ್ಲಿ ಒಟ್ಟಾಗಿ ಸೇರಿಬನ್ನಿ. ನಾನು ಆತ್ಮದಲ್ಲಿ ನಿಮ್ಮೊಂದಿ
ಗಿರುವೆನು. ನಮ್ಮ ಪ್ರಭುವಾದ ಯೇಸುವಿನ ಶಕ್ತಿಯೂ
ನಿಮ್ಮೊಂದಿಗೆ ಇರುವುದು. [5]ಆ ಮನುಷ್ಯನ ಪಾಪ ಸ್ವಭಾವವು
ನಾಶವಾಗುವುದಕ್ಕಾಗಿ ಅವನನ್ನು ಸೈತಾನನಿಗೆ ಒಪ್ಪಿಸಿಕೊಡಿರಿ.
ಆಗ ಪ್ರಭುವಿನ ದಿನದಂದು ಅವನ ಜೀವಾತ್ಮವು ರಕ್ಷಣೆ
ಹೊಂದಲು ಸಾಧ್ಯವಾಗುವುದು.

[6]ನೀವು ಅಹಂಕಾರಪಡುವುದು ಒಳ್ಳೆಯದಲ್ಲ. ''ಒಂದಿಷ್ಟು
ಹುಳಿಯು ಹಿಟ್ಟನ್ನೆಲ್ಲಾ ಉಬ್ಬಿಸುತ್ತದೆ'' ಎಂಬ ನುಡಿಯು ನಿಮಗೆ
ಗೊತ್ತೇ ಇದೆ. [7]ಹಳೆಯ ಹುಳಿಯನ್ನೆಲ್ಲಾ (ಪಾಪ) ತೆಗೆದು

ಹಾಕಿರಿ. ಆಗ ನೀವು ಹೊಸ ಹಿಟ್ಟಾಗುವಿರಿ. ನೀವು ನಿಜ
ವಾಗಿಯೂ ಹುಳಿರಹಿತವಾದ ಪಸ್ಕದ ರೊಟ್ಟಿಯಾಗಿದ್ದೀರಿ.*
ಹೌದು, ನಮ್ಮ ಪಸ್ಕದ ಕುರಿಮರಿಯಾದ ಕ್ರಿಸ್ತನು ಆಗಲೇ
ಕೊಲ್ಲಲ್ಪಟ್ಟಿದ್ದಾನೆ. 8ಆದ್ದರಿಂದ ನಾವು ಪಸ್ಕದ ಊಟ
ಮಾಡೋಣ. ದುಷ್ಟತನ ಮತ್ತು ಕೆಡುಕತನ ಎಂಬ ಹಳೆಯ
ಹುಳಿಯಿಂದ ಕೂಡಿರುವ ರೊಟ್ಟಿಯನ್ನು ನಾವು ತಿನ್ನದೆ ಹುಳಿ
ರಹಿತವಾದ ರೊಟ್ಟಿಯನ್ನು ತಿನ್ನೋಣ. ಸರಳತೆ ಮತ್ತು ಸತ್ಯತೆ
ಇವುಗಳೇ ಆ ಹುಳಿರಹಿತರೊಟ್ಟಿ.

9ಲೈಂಗಿಕ ಪಾಪ ಮಾಡುವ ಜನರ ಸಹವಾಸ ಮಾಡ
ಕೂಡದೆಂದು ನಾನು ನನ್ನ ಪತ್ರದಲ್ಲಿ ನಿಮಗೆ ಬರೆದಿದ್ದೆ. 10ಆದರೆ
ಈ ಲೋಕದ ಪಾಪಿಷ್ಠ ಜನರ ಸಹವಾಸವನ್ನು ನೀವು
ಮಾಡಕೂಡದೆಂಬ ಅರ್ಥದಲ್ಲಿ ನಾನು ಅದನ್ನು ಬರೆದಿರಲಿಲ್ಲ.
ಈ ಲೋಕದ ಜನರು ಲೈಂಗಿಕ ಪಾಪ ಮಾಡುತ್ತಾರೆ; ಅವರು
ಸ್ವಾರ್ಥಿಗಳಾಗಿದ್ದಾರೆ; ಒಬ್ಬರಿಗೊಬ್ಬರು ಮೋಸ ಮಾಡುತ್ತಾರೆ;
ವಿಗ್ರಹಗಳನ್ನು ಪೂಜಿಸುತ್ತಾರೆ. ಆ ಜನರಿಂದ ದೂರವಿರ
ಬೇಕಾದರೆ, ನೀವು ಈ ಲೋಕವನ್ನೇ ಬಿಟ್ಟು ಹೋಗಬೇಕಾಗು
ತ್ತದೆ. 11ಆದರೆ ಕ್ರಿಸ್ತನಲ್ಲಿ ತನ್ನನ್ನು ಸಹೋದರನೆಂದು ಹೇಳಿ
ಕೊಳ್ಳುವವನು ಲೈಂಗಿಕ ಪಾಪಮಾಡುವವನಾಗಿದ್ದರೆ, ಸ್ವಾರ್ಥಿ
ಯಾಗಿದ್ದರೆ, ವಿಗ್ರಹಗಳನ್ನು ಪೂಜಿಸುವವನಾಗಿದ್ದರೆ, ಜನರಿಗೆ
ಕೆಟ್ಟ ಮಾತುಗಳನ್ನಾಡುವವನಾಗಿದ್ದರೆ, ಮದ್ಯಪಾನ ಮಾಡಿ
ಮತ್ತನಾಗುವವನಾಗಿದ್ದರೆ, ಜನರಿಗೆ ಮೋಸ ಮಾಡುವವ
ನಾಗಿದ್ದರೆ, ಅವನ ಸಹವಾಸ ಮಾಡಬಾರದು; ಅವನೊಂದಿಗೆ
ಊಟವನ್ನು ಸಹ ಮಾಡಬಾರದು.

12-13ಸಭೆಗೆ ಸೇರಿಲ್ಲದ ಜನರಿಗೆ ತೀರ್ಪು ಮಾಡುವುದು ನನ್ನ
ಕೆಲಸವಲ್ಲ. ಅವರಿಗೆ ದೇವರೇ ತೀರ್ಪುಮಾಡುವನು. ಆದರೆ
ಸಭೆಗೆ ಸೇರಿರುವ ಜನರಿಗೆ ನೀವು ತೀರ್ಪುಮಾಡಬೇಕು.
‘‘ದುಷ್ಟನನ್ನು ಸಭೆಯಿಂದ ಹೊರಗೆ ಹಾಕಿ’’* ಎಂದು ಪವಿತ್ರ
ಗ್ರಂಥ ಹೇಳುತ್ತದೆ.

## ಕ್ರೈಸ್ತರ ನಡುವೆ ನ್ಯಾಯನಿರ್ಣಯದ ಸಮಸ್ಯೆಗಳು

6 ನಿಮ್ಮಲ್ಲಿ ಯಾವನಿಗಾದರೂ ಮತ್ತೊಬ್ಬನ ಮೇಲೆ
ವಿರೋಧವಿದ್ದರೆ, ನೀವು ನ್ಯಾಯಾಲಯಗಳಿಗೆ ಹೋಗು
ವುದೇಕೆ? ಅವರು ನೀತಿವಂತರಲ್ಲ. ಹೀಗಿರಲು ನಿಮಗೆ ನ್ಯಾಯ
ತೀರ್ಪು ಮಾಡಲು ಅವರಿಗೆ ನೀವು ಅವಕಾಶ ಮಾಡಿಕೊಡುವು
ದೇಕೆ? ನಿಮಗೆ ನಾಚಿಕೆಯಾಗಬೇಕು. ನಿಮಗೆ ನ್ಯಾಯತೀರ್ಪು
ನೀಡಲು ನೀವು ದೇವಜನರಿಗೆ ಏಕೆ ಅವಕಾಶ ಕೊಡಬಾರದು?
2ದೇವಜನರು ಲೋಕಕ್ಕೆ ತೀರ್ಪು ಮಾಡುವವರೆಂಬುದು ನಿಮಗೆ
ತಿಳಿಯದೊ? ದೇವಜನರು ಲೋಕಕ್ಕೆ ನ್ಯಾಯತೀರ್ಪು ಮಾಡು
ವವರಾಗಿದ್ದರೆ, ಇಂಥ ಚಿಕ್ಕ ಸಂಗತಿಗಳ ಬಗ್ಗೆಯೂ ನ್ಯಾಯ
ತೀರ್ಪು ಮಾಡಬಲ್ಲರೆಂಬುದು ನಿಶ್ಚಯವಾಗಿದೆ. 3ಮುಂದಿನ
ಕಾಲದಲ್ಲಿ ನಾವು ದೇವದೂತರಿಗೂ ನ್ಯಾಯತೀರಿಸುತ್ತೇವೆ
ಎಂಬುದು ನಿಮಗೆ ಗೊತ್ತಿದೆ. ಆದ್ದರಿಂದ ಈ ಜೀವಿತದ ಸಂಗತಿ
ಗಳನ್ನು ಕುರಿತು ನಾವು ತೀರ್ಪು ಮಾಡಬಲ್ಲೆವು. 4ಹೀಗಿರಲು,
ನಿಮ್ಮಲ್ಲಿ ಭಿನ್ನಾಭಿಪ್ರಾಯಗಳಿದ್ದು ಅದಕ್ಕೆ ನ್ಯಾಯನಿರ್ಣಯದ
ಅಗತ್ಯವಿರುವಾಗ, ಸಭೆಗೆ ಸೇರಿಲ್ಲದ ಜನರ ಬಳಿಗೆ ನೀವು ಆ
ಸಂಗತಿಗಳನ್ನು ತೆಗೆದುಕೊಂಡು ಹೋಗುವುದೇಕೆ? ಆ ಜನರಿಗೆ
ಸಭೆಯಲ್ಲಿ ಯಾವ ಮಾನ್ಯತೆಯೂ ಇಲ್ಲ. 5ನಿಮ್ಮನ್ನು ನಾಚಿಕೆ
ಪಡಿಸಲು ಹೀಗೆ ಹೇಳುತ್ತಿದ್ದೇನೆ. ವಿಶ್ವಾಸಿಗಳಾಗಿರುವ ಇಬ್ಬರು
ಸಹೋದರರ ನಡುವೆ ಉಂಟಾಗಿರುವ ವ್ಯಾಜ್ಯಕ್ಕೆ ತೀರ್ಪು ನೀಡ
ಬಲ್ಲ ಜ್ಞಾನಿಯೊಬ್ಬನು ನಿಮ್ಮ ಸಭೆಯಲ್ಲಿ ಇಲ್ಲವೇ? 6ನಿಮ್ಮಲ್ಲಿ
ಒಬ್ಬ ಸಹೋದರನು ಮತ್ತೊಬ್ಬ ಸಹೋದರನ ವಿರೋಧವಾಗಿ
ನ್ಯಾಯಾಲಯಕ್ಕೆ ಹೋಗುತ್ತಾನೆ. ಅವರ ವ್ಯಾಜ್ಯಕ್ಕೆ ತೀರ್ಪು
ನೀಡಲು ಅವಿಶ್ವಾಸಿಗಳಿಗೆ ನೀವು ಅವಕಾಶ ಮಾಡಿಕೊಟ್ಟಿದ್ದೀರಿ!

7ನೀವು ಆಗಲೇ ಸೋತು ಹೋಗಿದ್ದೀರೆಂಬುದನ್ನು ನಿಮ್ಮ
ಮಧ್ಯದಲ್ಲಿರುವ ವ್ಯಾಜ್ಯಗಳೇ ಸೂಚಿಸುತ್ತವೆ. ಅದಕ್ಕಿಂತ, ನೀವು
ಕೆಟ್ಟದ್ದನ್ನು ಸಹಿಸಿಕೊಳ್ಳಬೇಕಿತ್ತು; ಮೋಸವನ್ನು ತಾಳಿಕೊಳ್ಳ
ಬೇಕಿತ್ತು. 8ಆದರೆ ಸ್ವತಃ ನೀವೇ ಕೆಟ್ಟದ್ದನ್ನು ಮಾಡುತ್ತೀರಿ ಮತ್ತು
ಮೋಸ ಮಾಡುತ್ತೀರಿ! ಕ್ರಿಸ್ತನಲ್ಲಿ ನಿಮ್ಮ ಸಹೋದರನಾಗಿರು
ವವನಿಗೇ ನೀವು ಹೀಗೆ ಮಾಡುತ್ತೀರಿ.

9-10ಅಧರ್ಮಿಗಳು ದೇವರ ರಾಜ್ಯವನ್ನು ಪಡೆಯುವು
ದಿಲ್ಲವೆಂದು ನಿಮಗೆ ಖಂಡಿತವಾಗಿ ತಿಳಿದಿದೆ. ನಿಮ್ಮನ್ನು ನೀವೇ
ಮೋಸಪಡಿಸಿಕೊಳ್ಳಬೇಡಿ. ದೇವರ ರಾಜ್ಯಕ್ಕೆ ಸೇರದ ಜನರು
ಯಾರಾರೆಂದರೆ: ಲೈಂಗಿಕ ಪಾಪ ಮಾಡುವವರು, ವಿಗ್ರಹಗಳನ್ನು
ಪೂಜಿಸುವವರು, ವ್ಯಭಿಚಾರ ಮಾಡುವವರು, ಸಲಿಂಗಕಾಮಿ
ಗಳು, ಕದಿಯುವವರು, ಸ್ವಾರ್ಥಿಗಳು, ಕುಡುಕರು, ಬೈಯು
ವವರು ಮತ್ತು ಮೋಸಗಾರರು. 11ಹಿಂದೆ ನಿಮ್ಮಲ್ಲಿ ಕೆಲವರು
ಅಂಥವರಾಗಿದ್ದಿರಿ. ಆದರೆ ಪ್ರಭುವಾದ ಯೇಸು ಕ್ರಿಸ್ತನ
ಹೆಸರಿನಲ್ಲಿಯೂ ನಮ್ಮ ದೇವರಾತ್ಮನ ಮೂಲಕವಾಗಿಯೂ
ನೀವು ತೊಳೆಯಲ್ಪಟ್ಟಿರಿ; ಪರಿಶುದ್ಧರಾದಿರಿ ಮತ್ತು ನೀತಿವಂತ
ರೆಂಬ ನಿರ್ಣಯವನ್ನು ಹೊಂದಿಕೊಂಡಿರಿ.

## ದೇವರ ಮಹಿಮೆಗಾಗಿ ನಿಮ್ಮ ದೇಹಗಳನ್ನು ಉಪಯೋಗಿಸಿರಿ

12‘‘ಎಲ್ಲಾ ಕಾರ್ಯಗಳನ್ನು ಮಾಡುವುದಕ್ಕೆ ನನಗೆ ಸ್ವತಂತ್ರ
ವಿದೆ.’’ ಆದರೆ ಪ್ರತಿಯೊಂದೂ ಜನರಿಗೆ ಪ್ರಯೋಜಕವಲ್ಲ.
‘‘ಪ್ರತಿಯೊಂದನ್ನು ಮಾಡುವುದಕ್ಕೆ ನನಗೆ ಸ್ವತಂತ್ರವಿದೆ.’’ ಆದರೆ
ನಾನು ಯಾವುದನ್ನೂ ನನ್ನ ಒಡೆಯನನ್ನಾಗಿ ಮಾಡಿಕೊಳ್ಳು
ವುದಿಲ್ಲ. 13‘‘ಆಹಾರವು ಹೊಟ್ಟೆಗೋಸ್ಕರವಿದೆ, ಹೊಟ್ಟೆಯು
ಆಹಾರಕ್ಕೋಸ್ಕರವಿದೆ.’’ ಹೌದು, ದೇವರು ಅವೆರಡನ್ನು ನಾಶ
ಮಾಡುವನು. ದೇಹವಿರುವುದು ಲೈಂಗಿಕ ಪಾಪಮಾಡುವುದ
ಕ್ಕಾಗಿಯಲ್ಲ. ದೇಹವು ಪ್ರಭುವಿಗೋಸ್ಕರವಿದೆ, ಪ್ರಭುವು ದೇಹ
ಕ್ಕೋಸ್ಕರವಿದ್ದಾನೆ. 14ದೇವರು ತನ್ನ ಶಕ್ತಿಯಿಂದ ಪ್ರಭು ಯೇಸು
ವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದನು. ದೇವರು
ನಮ್ಮನ್ನು ಸಹ ಜೀವಂತವಾಗಿ ಎಬ್ಬಿಸುವನು. 15ನಿಮ್ಮ ದೇಹಗಳು
ಕ್ರಿಸ್ತನ ಅಂಗಗಳಾಗಿವೆ ಎಂಬುದು ನಿಮಗೆ ನಿಶ್ಚಯವಾಗಿ ತಿಳಿ
ದಿಲ್ಲವೇ? ಹೀಗಿರಲಾಗಿ, ನಾನು ಕ್ರಿಸ್ತನ ಅಂಗಗಳನ್ನು ತೆಗೆದು
ಕೊಂಡು ಅವುಗಳನ್ನು ಸೂಳೆಯ ಅಂಗಗಳನ್ನಾಗಿ ಮಾಡ
ಕೂಡದು. 16‘‘ಇಬ್ಬರೂ ಒಂದೇ ದೇಹವಾಗುತ್ತಾರೆ’’* ಎಂದು
ಪವಿತ್ರ ಗ್ರಂಥದಲ್ಲಿ ಬರೆದಿದೆ. ಆದ್ದರಿಂದ ಸೂಳೆಯೊಂದಿಗೆ
ಲೈಂಗಿಕ ಸಂಬಂಧವಿರುವವನು ಆಕೆಯೊಂದಿಗೆ ಒಂದೇ ದೇಹ
ವಾಗಿದ್ದಾನೆ ಎಂಬುದು ನಿಮಗೆ ತಿಳಿದಿರಬೇಕು. 17ಆದರೆ

---

**ಪಸ್ಕದ ರೊಟ್ಟಿ** ಯೆಹೂದ್ಯರು ತಮ್ಮ ವಾರ್ಷಿಕ ಪಸ್ಕ ಹಬ್ಬದಲ್ಲಿ ತಿನ್ನುವ ಹುಳಿರಹಿತವಾದ ರೊಟ್ಟಿ.

**ದುಷ್ಟ... ಹಾಕಿ** ಧರ್ಮೋಪದೇಶ. 22:21,24

**ಇಬ್ಬರೂ ... ದೇಹವಾಗುತ್ತಾರೆ** ಆದಿಕಾಂಡ 2:24 ಮತ್ತಾಯ 19:5.

ಪ್ರಭುವಿನೊಂದಿಗೆ ಸಂಬಂಧವನ್ನು ಹೊಂದಿರುವಂಥವನು
ಆತ್ಮದಲ್ಲಿ ಪ್ರಭುವಿನೊಂದಿಗೆ ಒಂದಾಗಿರುತ್ತಾನೆ.

18ಆದ್ದರಿಂದ ಲೈಂಗಿಕ ಪಾಪದಿಂದ ಓಡಿಹೋಗಿರಿ. ಒಬ್ಬ
ವ್ಯಕ್ತಿಯು ಮಾಡುವ ಇತರ ಪಾಪಗಳೆಲ್ಲಾ ಅವನಿಗೆ ಹೊರ
ತಾಗಿವೆ. ಆದರೆ ಲೈಂಗಿಕ ಪಾಪ ಮಾಡುವ ವ್ಯಕ್ತಿ ತನ್ನ ಸ್ವಂತ ದೇಹಕ್ಕೆ
ವಿರೋಧವಾಗಿ ಪಾಪ ಮಾಡುತ್ತಾನೆ. 19ನಿಮ್ಮ ದೇಹವು
ಪವಿತ್ರಾತ್ಮನಿಗೆ ಆಲಯವಾಗಿದೆ ಎಂಬುದು ನಿಮಗೆ ಗೊತ್ತಿದೆ.
ಆತನು ನಿಮ್ಮೊಳಗಿದ್ದಾನೆ. ನೀವು ದೇವರಿಂದ ಆತನನ್ನು ಹೊಂದಿ
ಕೊಂಡಿರಿ. ನೀವು ನಿಮ್ಮ ಸ್ವಂತ ಸ್ವತ್ತುಗಳಲ್ಲ. 20ನೀವು ದೇವರಿಂದ
ಕ್ರಯಕ್ಕೆ ಕೊಳ್ಳಲ್ಪಟ್ಟವರು. ಆದ್ದರಿಂದ ನಿಮ್ಮ ದೇಹಗಳಿಂದ
ದೇವರನ್ನು ಘನಪಡಿಸಿರಿ.

## ಮದುವೆ ಕುರಿತು ಬೋಧನೆ

7 ನೀವು ಬರೆದು ಕೇಳಿರುವ ಸಂಗತಿಗಳ ಬಗ್ಗೆ ಈಗ ನಾನು
ಚರ್ಚಿಸುತ್ತೇನೆ. ಪುರುಷನು ಮದುವೆ ಮಾಡಿಕೊಳ್ಳದಿರು
ವುದು ಒಳ್ಳೆಯದೇ ಸರಿ. 2ಆದರೆ ಲೈಂಗಿಕ ಪಾಪ ಅಪಾಯಕರ
ವಾದದ್ದು. ಆದ್ದರಿಂದ ಪ್ರತಿಯೊಬ್ಬ ಪುರುಷನಿಗೂ ಸ್ವಂತ ಹೆಂಡತಿ
ಇದ್ದರೆ ಮತ್ತು ಪ್ರತಿಯೊಬ್ಬ ಸ್ತ್ರೀಯೂ ಸ್ವಂತ ಗಂಡನನ್ನು
ಹೊಂದಿದ್ದರೆ ಒಳ್ಳೆಯದು. 3ಗಂಡನು ತನ್ನ ಹೆಂಡತಿಗೆ ದಾಂಪತ್ಯ
ಜೀವನದಲ್ಲಿ ಸಲ್ಲತಕ್ಕದ್ದನ್ನೆಲ್ಲ ಸಲ್ಲಿಸಲಿ. ಮತ್ತು ಹೆಂಡತಿಯು ತನ್ನ
ಗಂಡನಿಗೆ ದಾಂಪತ್ಯ ಜೀವನದಲ್ಲಿ ಸಲ್ಲತಕ್ಕದ್ದನ್ನೆಲ್ಲ ಸಲ್ಲಿಸಲಿ.
4ಹೆಂಡತಿಗೆ ತನ್ನ ಸ್ವಂತ ದೇಹದ ಮೇಲೆ ಅಧಿಕಾರವಿಲ್ಲ. ಆಕೆಯ
ಗಂಡನಿಗೆ ಆಕೆಯ ದೇಹದ ಮೇಲೆ ಅಧಿಕಾರವಿದೆ. ಅದೇ ರೀತಿ,
ಗಂಡನಿಗೆ ತನ್ನ ಸ್ವಂತ ದೇಹದ ಮೇಲೆ ಅಧಿಕಾರವಿಲ್ಲ. ಅವನ
ಹೆಂಡತಿಗೆ ಅವನ ದೇಹದ ಮೇಲೆ ಅಧಿಕಾರವಿದೆ. 5ಆದುದರಿಂದ
ಗಂಡ ಮತ್ತು ಹೆಂಡತಿ ಒಬ್ಬರಿಗೊಬ್ಬರು ದಾಂಪತ್ಯ ಕರ್ತವ್ಯ
ಗಳನ್ನು ನೆರವೇರಿಸಲು ನಿರಾಕರಿಸಬಾರದು. ಅವರು ತಮ್ಮ
ಸಮಯವನ್ನು ಪ್ರಾರ್ಥನೆಯಲ್ಲಿ ವಿನಿಯೋಗಿಸುವುದಕ್ಕಾಗಿ ಸ್ವಲ್ಪ
ಕಾಲ ಲೈಂಗಿಕ ಸಂಬಂಧದಿಂದ ದೂರವಿರಬಹುದು. ಆದರೆ
ಅದಕ್ಕೆ ಪರಸ್ಪರ ಸಮ್ಮತಿಯಿರಬೇಕು. ಬಳಿಕ ಮತ್ತೆ ಒಂದಾಗ
ಬೇಕು. ಇಲ್ಲವಾದರೆ ನಿಮ್ಮ ಬಲಹೀನತೆಯನ್ನು ಕಂಡು
ಸೈತಾನನು ಪಾಪಕ್ಕೆ ಪ್ರಚೋದಿಸಬಹುದು. 6ಸ್ವಲ್ಪಕಾಲ ಅಗಲಿ
ದೂರವಿರುವುದಕ್ಕೆ ಅನುಮತಿ ಕೊಡಲು ನಾನು ಇದನ್ನು ಹೇಳು
ತ್ತಿದ್ದೇನೆ. ಇದು ಆಜ್ಞೆಯಲ್ಲ. 7ಎಲ್ಲಾ ಜನರು ನಮ್ಮಂತೆ ಇರ
ಬೇಕೆಂಬುದು ನಮ್ಮ ಅಭಿಲಾಷೆ. ಆದರೆ ಪ್ರತಿಯೊಬ್ಬ ವ್ಯಕ್ತಿಯು
ದೇವರಿಂದ ತನ್ನದೇ ಆದ ವರವನ್ನು ಹೊಂದಿದ್ದಾನೆ. ಒಬ್ಬ ವ್ಯಕ್ತಿಗೆ
ಒಂದು ವರವಿದ್ದರೆ ಮತ್ತೊಬ್ಬನಿಗೆ ಇನ್ನೊಂದು ವರವಿದೆ.

8ವಿವಾಹವಾಗಿಲ್ಲದ ಜನರಿಗೆ ಮತ್ತು ವಿಧವೆಯರಿಗೆ ನಾನು
ಹೇಳುವುದೇನಂದರೆ: ಅವರು ನನ್ನಂತೆ ಒಬ್ಬಂಟಿಗರಾಗಿ ಇರು
ವುದೇ ಅವರಿಗೆ ಒಳ್ಳೆಯದು. 9ಆದರೆ ಅವರು ತಮ್ಮ ದೇಹಗಳನ್ನು
ಹತೋಟಿಯಲ್ಲಿ ಇಟ್ಟುಕೊಳ್ಳಲಾಗದಿದ್ದರೆ, ಅವರು ಮದುವೆ
ಯಾಗಬೇಕು. ಲೈಂಗಿಕ ಆಸೆಯಿಂದ ಬೆಂದು ಹೋಗುವುದ
ಕ್ಕಿಂತಲೂ ಮದುವೆ ಮಾಡಿಕೊಳ್ಳುವುದೇ ಉತ್ತಮವಾಗಿದೆ.

10ಮದುವೆಯಾಗಿರುವವರಿಗೆ ನಾನು ಈ ಆಜ್ಞೆಯನ್ನು
ಕೊಡುತ್ತೇನೆ. (ಈ ಆಜ್ಞೆಯು ನನ್ನದಲ್ಲ. ಪ್ರಭುವಿನದು.)
ಹೆಂಡತಿಯು ತನ್ನ ಗಂಡನನ್ನು ಬಿಟ್ಟು ಬಿಡಬಾರದು.
11ಹೆಂಡತಿಯು ತನ್ನ ಗಂಡನನ್ನು ಬಿಟ್ಟುಬಿಟ್ಟರೆ ಆಕೆಯು ಮತ್ತೆ
ಮದುವೆ ಮಾಡಿಕೊಳ್ಳಕೂಡದು. ಇಲ್ಲವಾದರೆ, ಆಕೆ ತನ್ನ ಗಂಡನ
ಸಂಗಡ ಮತ್ತೆ ಒಂದಾಗಬೇಕು. ಇದೇ ರೀತಿ, ಗಂಡನು, ತನ್ನ
ಹೆಂಡತಿಯನ್ನು ಬಿಟ್ಟುಬಿಡಬಾರದು. 12ಉಳಿದೆಲ್ಲ ಜನರ
ವಿಷಯದಲ್ಲಿ ನಾನು ಹೇಳುವುದೇನೆಂದರೆ (ಈ ಸಂಗತಿಗಳನ್ನು
ಹೇಳುತ್ತಿರುವವನು ನಾನೇ ಹೊರತು ಪ್ರಭುವಲ್ಲ.) ಕ್ರಿಸ್ತನಲ್ಲಿ
ಸಹೋದರನಾದ ಒಬ್ಬನಿಗೆ ಕ್ರಿಸ್ತ ವಿಶ್ವಾಸಿಯಲ್ಲದ ಹೆಂಡತಿ
ಯಿದ್ದರೆ ಮತ್ತು ಆಕೆ ಅವನೊಂದಿಗೆ ಬಾಳ್ವೆಮಾಡಲು ಇಚ್ಛೈಸಿದರೆ
ಅವನು ಆಕೆಗೆ ವಿವಾಹ ವಿಚ್ಛೇದನ ಕೊಡಕೂಡದು. 13ಅದೇ
ರೀತಿ, ಸ್ತ್ರೀಯೊಬ್ಬಳಿಗೆ ಕ್ರಿಸ್ತ ವಿಶ್ವಾಸಿಯಲ್ಲದ ಗಂಡನು ಇದ್ದರೆ
ಮತ್ತು ಅವನು ಆಕೆಯೊಂದಿಗೆ ಬಾಳ್ವೆಮಾಡಲು ಇಚ್ಛೈಸಿದರೆ ಆಕೆ
ಅವನಿಗೆ ವಿವಾಹ ವಿಚ್ಛೇದನ ಕೊಡಕೂಡದು. 14ಕ್ರಿಸ್ತವಿಶ್ವಾಸಿ
ಯಲ್ಲದ ಗಂಡನು ತನ್ನ ಕ್ರೈಸ್ತ ಹೆಂಡತಿಯ ಮೂಲಕ ಪವಿತ್ರ
ನಾಗುತ್ತಾನೆ. ಅದೇ ರೀತಿ, ಕ್ರಿಸ್ತವಿಶ್ವಾಸಿಯಲ್ಲದ ಹೆಂಡತಿಯು
ತನ್ನ ಕ್ರೈಸ್ತ ಗಂಡನ ಮೂಲಕ ಪವಿತ್ರಳಾಗುತ್ತಾಳೆ. ಇದು ಸತ್ಯ
ವಾಗಿಲ್ಲದಿದ್ದರೆ, ನಿಮ್ಮ ಮಕ್ಕಳು ಪವಿತ್ರರಾಗುತ್ತಿರಲಿಲ್ಲ. ಆದರೆ
ಈಗ ನಿಮ್ಮ ಮಕ್ಕಳು ಪವಿತ್ರರಾಗಿದ್ದಾರೆ.

15ಆದರೆ ಕ್ರಿಸ್ತವಿಶ್ವಾಸಿಯಲ್ಲದ ವ್ಯಕ್ತಿಯು ಬಿಟ್ಟು
ಹೋಗಲು ನಿರ್ಧರಿಸಿದರೆ, ಆ ವ್ಯಕ್ತಿಯು ಬಿಟ್ಟು ಹೋಗಲಿ. ಈ
ರೀತಿ ಸಂಭವಿಸಿದರೆ, ಕ್ರೈಸ್ತಸಹೋದರನಾಗಲಿ ಕ್ರೈಸ್ತಸಹೋದರಿ
ಯಾಗಲಿ ವಿವಾಹ ಬಂಧನದಿಂದ ಬಿಡುಗಡೆಯಾಗಿದ್ದಾರೆ.
ದೇವರು ನಮ್ಮನ್ನು ಸಮಾಧಾನದ ಜೀವಿತಕ್ಕೆ ಕರೆದನು.
16ಹೆಂಡತಿಯರೇ, ನೀವು ನಿಮ್ಮ ಗಂಡಂದಿರನ್ನು ರಕ್ಷಿಸಬಹುದು.
ಗಂಡಂದಿರೇ, ನೀವು ನಿಮ್ಮ ಹೆಂಡತಿಯರನ್ನು ರಕ್ಷಿಸಬಹುದು.
ಆದರೆ ಮುಂದೆ ಏನಾಗವುದೋ ನಮಗೆ ಗೊತ್ತಿಲ್ಲ.

## ದೇವರ ಕರೆಗೆ ತಕ್ಕಂತೆ ಜೀವಿಸಿರಿ

17ಆದರೂ ದೇವರು ಪ್ರತಿಯೊಬ್ಬನಿಗೆ ಜೀವನದಲ್ಲಿ ಯಾವ
ಸ್ಥಿತಿಯನ್ನು ನೇಮಿಸಿದ್ದಾನೋ ಅಂದರೆ ದೇವರು ನಿಮ್ಮನ್ನು
ಕರೆದಾಗ ನೀವು ಯಾವ ಸ್ಥಿತಿಯಲ್ಲಿದ್ದಿರೋ ಅದೇ ಸ್ಥಿತಿಯಲ್ಲಿ
ಮುಂದುವರಿಯಬೇಕು. ನಾನು ಎಲ್ಲಾ ಸಭೆಗಳಿಗೂ ಇದನ್ನೇ
ಆಜ್ಞಾಪಿಸುತ್ತೇನೆ. 18ದೇವರಿಂದ ಕರೆಯಲ್ಪಟ್ಟ ವ್ಯಕ್ತಿಯು
ಮೊದಲೇ ಸುನ್ನತಿ ಮಾಡಿಸಿಕೊಂಡವನಾಗಿದ್ದರೆ, ಅವನು
ಸುನ್ನತಿಯಿಲ್ಲದಂಥವನಾಗಬಾರದು. ದೇವರಿಂದ ಕರೆಯಲ್ಪಟ್ಟ
ವ್ಯಕ್ತಿಯು ಸುನ್ನತಿಯನ್ನು ಹೊಂದಿಲ್ಲದವನಾಗಿದ್ದರೆ, ಅವನು
ಸುನ್ನತಿಯನ್ನು ಮಾಡಿಸಿಕೊಳ್ಳಬಾರದು. 19ಸುನ್ನತಿಯನ್ನು
ಮಾಡಿಸಿಕೊಳ್ಳುವುದಾಗಲಿ ಮಾಡಿಸಿಕೊಳ್ಳದಿರುವುದಾಗಲಿ
ಮುಖ್ಯವಲ್ಲ. ದೇವರ ಆಜ್ಞೆಗಳಿಗೆ ವಿಧೇಯರಾಗುವುದೇ
ಮುಖ್ಯವಾದದ್ದು. 20ದೇವರು ಕರೆದಾಗ ಪ್ರತಿಯೊಬ್ಬನು ಯಾವ
ಸ್ಥಿತಿಯಲ್ಲಿದ್ದನೊ ಅದೇ ಸ್ಥಿತಿಯಲ್ಲಿ ಇರಬೇಕು. 21ದೇವರು
ನಿನ್ನನ್ನು ಕರೆದಾಗ ನೀನು ಗುಲಾಮನಾಗಿದ್ದರೆ, ಚಿಂತಿಸಬೇಡ.
ಆದರೆ ನೀನು ಬಿಡುಗಡೆಯಾಗಲು ಸಾಧ್ಯವಿದ್ದರೆ, ಬಿಡುಗಡೆ
ಯಾಗು. 22ದೇವರು ಕರೆದಾಗ ಗುಲಾಮನಾಗಿದ್ದವನು
ಪ್ರಭುವಿನಲ್ಲಿ ಬಿಡುಗಡೆಯಾಗಿದ್ದಾನೆ. ಅವನು ಪ್ರಭುವಿಗೆ ಸೇರಿ
ದವನಾಗಿದ್ದಾನೆ. ಅದೇ ರೀತಿಯಲ್ಲಿ ದೇವರು ಕರೆದಾಗ ಸ್ವತಂತ್ರ
ನಾಗಿದ್ದವನು ಈಗ ಕ್ರಿಸ್ತನ ಗುಲಾಮನಾಗಿದ್ದಾನೆ. 23ನಿಮ್ಮನ್ನು
ಕ್ರಯಕ್ಕೆ ಕೊಂಡುಕೊಳ್ಳಲಾಗಿದೆ. ಆದ್ದರಿಂದ ನೀವು ಮನುಷ್ಯರ
ಗುಲಾಮರಾಗಬೇಡಿ. 24ಸಹೋದರ ಸಹೋದರಿಯರೇ,

ದೇವರು ನಿಮ್ಮನ್ನು ಕರೆದಾಗ ನಿಮ್ಮಲ್ಲಿ ಪ್ರತಿಯೊಬ್ಬರು ಯಾವ ಸ್ಥಿತಿಯಲ್ಲಿದ್ದಿರೋ ಅದೇ ಸ್ಥಿತಿಯಲ್ಲಿ ದೇವರೊಂದಿಗೆ ಹೊಸ ಜೀವನದಲ್ಲಿ ಮುಂದುವರಿಯಬೇಕು.

### ಮದುವೆ ಮಾಡಿಕೊಳ್ಳುವುದರ ಬಗ್ಗೆ ಪ್ರಶ್ನೆಗಳು

25ಮದುವೆಯಾಗಿಲ್ಲದ ಜನರ ಬಗ್ಗೆ ಈಗ ನಾನು ಬರೆಯು
ತ್ತೇನೆ. ಇದರ ಬಗ್ಗೆ ಪ್ರಭುವಿನಿಂದ ಬಂದ ಯಾವ ಆಜ್ಞೆಯೂ
ನನ್ನಲ್ಲಿಲ್ಲ. ಆದರೆ ನಾನು ನನ್ನ ಅಭಿಪ್ರಾಯವನ್ನು ನಿಮಗೆ
ಕೊಡುತ್ತೇನೆ. ನಾನು ಪ್ರಭುವಿನಿಂದ ಕರುಣೆಯನ್ನು ಹೊಂದಿ
ಕೊಂಡಿರುವುದರಿಂದ ನಂಬಿಕೆಗೆ ಅರ್ಹನಾಗಿದ್ದೇನೆ. 26ಇದು
ಕಷ್ಟಕಾಲವಾಗಿದೆ. ಆದ್ದರಿಂದ, ನೀವು ಯಾವ ಸ್ಥಿತಿಯಲ್ಲಿದ್ದೀರೊ
ಅದೇ ಸ್ಥಿತಿಯಲ್ಲಿರುವುದು ಒಳ್ಳೆಯದೆಂಬುದು ನನ್ನ
ಆಲೋಚನೆ. 27ನಿನಗೆ ಹೆಂಡತಿಯಿದ್ದರೆ, ಆಕೆಯಿಂದ ಬಿಡುಗಡೆ
ಹೊಂದಲು ಪ್ರಯತ್ನಿಸಬೇಡ. ನಿನಗೆ ಮದುವೆಯಾಗಿಲ್ಲದಿದ್ದರೆ,
ಹೆಂಡತಿಯನ್ನು ಹುಡುಕಲು ಪ್ರಯತ್ನಿಸಬೇಡ. 28ಆದರೆ ನೀನು
ಮದುವೆಯಾಗಲು ನಿರ್ಧರಿಸಿದರೆ, ಅದು ಪಾಪವೇನಲ್ಲ.
ಮದುವೆಯಾಗಿಲ್ಲದ ಹುಡುಗಿಯು ಮದುವೆಯಾಗುವುದು
ಪಾಪವಲ್ಲ. ಆದರೆ ಮದುವೆಯಾಗುವ ಜನರಿಗೆ ಈ ಲೋಕದಲ್ಲಿ
ಕಷ್ಟವಿದೆ. ನೀವು ಈ ಕಷ್ಟದಿಂದ ವಿಮುಕ್ತರಾಗಿರಬೇಕೆಂಬುದು
ನನ್ನ ಅಪೇಕ್ಷೆಯಾಗಿದೆ.

29ಸಹೋದರ ಸಹೋದರಿಯರೇ, ನನ್ನ ಅಭಿಪ್ರಾಯ
ಇದು: ನಮಗೆ ಹೆಚ್ಚು ಸಮಯ ಉಳಿದಿಲ್ಲ. ಆದ್ದರಿಂದ,
ಹೆಂಡತಿಯರನ್ನು ಹೊಂದಿರುವ ಜನರು ಹೆಂಡತಿಯರಿಲ್ಲ
ದವರಂತೆ ಪ್ರಭುವಿನ ಸೇವೆಗಾಗಿ ತಮ್ಮ ಸಮಯವನ್ನು
ಉಪಯೋಗಿಸಬೇಕು. 30ದುಃಖದಿಂದಿರುವ ಜನರು ದುಃಖ
ವಿಲ್ಲದವರಂತೆ ಜೀವಿಸಬೇಕು. ಸಂತೋಷದಿಂದ ಇರುವ ಜನರು
ಸಂತೋಷವಿಲ್ಲದ ಜನರಂತೆ ಜೀವಿಸಬೇಕು. ವಸ್ತುಗಳನ್ನು
ಕೊಂಡುಕೊಳ್ಳುವ ಜನರು ಏನೂ ಇಲ್ಲದವರಂತೆ ಜೀವಿಸ
ಬೇಕು. 31ಈ ಲೋಕದ ವಸ್ತುಗಳನ್ನು ಉಪಯೋಗಿಸುವ
ಜನರು ತಮಗೆ ಆ ವಸ್ತುಗಳು ಮುಖ್ಯವಲ್ಲವೆಂಬಂತೆ ಜೀವಿಸ
ಬೇಕು. ಏಕೆಂದರೆ, ಈ ಲೋಕದ ಇಂದಿನ ಸ್ಥಿತಿಯು ಬಹು
ಬೇಗನೆ ಗತಿಸಿಹೋಗುವುದು.

32ನೀವು ಚಿಂತೆ ಇಲ್ಲದೆ ಇರಬೇಕೆಂಬುದೇ ನನ್ನ ಬಯಕೆ
ಯಾಗಿದೆ. ಮದುವೆಯಾಗಿಲ್ಲದ ವ್ಯಕ್ತಿಯು ಪ್ರಭುವಿನ ಸೇವೆ
ಯಲ್ಲಿ ನಿರತನಾಗಿರುತ್ತಾನೆ. ಅವನು ಪ್ರಭುವನ್ನು ಮೆಚ್ಚಿಸಲು
ಪ್ರಯತ್ನಿಸುತ್ತಿರುತ್ತಾನೆ. 33ಆದರೆ ಮದುವೆಯಾಗಿರುವ
ವ್ಯಕ್ತಿಯು ಈ ಲೋಕದ ಕಾರ್ಯಗಳಲ್ಲಿ ನಿರತನಾಗಿರುತ್ತಾನೆ.
ಅವನು ತನ್ನ ಹೆಂಡತಿಯನ್ನು ಮೆಚ್ಚಿಸಲು ಪ್ರಯತ್ನಿಸುತ್ತಿರುತ್ತಾನೆ.
34ಅವನು ತನ್ನ ಹೆಂಡತಿಯನ್ನು ಮತ್ತು ಪ್ರಭುವನ್ನು ಮೆಚ್ಚಿಸು
ವುದರ ಬಗ್ಗೆ ಆಲೋಚಿಸಬೇಕಾಗುತ್ತದೆ. ಮದುವೆಯಾಗಿಲ್ಲದ
ಸ್ತ್ರೀಯಾಗಲಿ ಹುಡುಗಿಯಾಗಲಿ ಪ್ರಭುವಿನ ಸೇವೆಯಲ್ಲಿ ನಿರತ
ಳಾಗಿರುತ್ತಾಳೆ. ಆಕೆ ತನ್ನ ದೇಹ ಮತ್ತು ಆತ್ಮಗಳನ್ನು ಸಂಪೂರ್ಣ
ವಾಗಿ ಪ್ರಭುವಿಗೆ ಕೊಡಲು ಬಯಸುತ್ತಾಳೆ. ಆದರೆ ಮದುವೆ
ಯಾದ ಸ್ತ್ರೀಯು ಈ ಲೋಕದ ಕಾರ್ಯಗಳಲ್ಲಿ ನಿರತಳಾಗಿರು
ತ್ತಾಳೆ. ಆಕೆ ತನ್ನ ಗಂಡನನ್ನು ಮೆಚ್ಚಿಸಲು ಪ್ರಯತ್ನಿಸುತ್ತಿರುತ್ತಾಳೆ.
35ನಿಮಗೆ ಸಹಾಯವಾಗಲೆಂದು ಈ ಸಂಗತಿಗಳನ್ನು ಹೇಳು
ತ್ತಿದ್ದೇನೆ. ನಾನು ನಿಮ್ಮನ್ನು ನಿಯಂತ್ರಿಸುವುದಕ್ಕೆ ಪ್ರಯತ್ನಿ
ಸುತ್ತಿಲ್ಲ. ಆದರೆ ನೀವು ಸರಿಯಾದ ಮಾರ್ಗದಲ್ಲಿ ಜೀವಿಸ
ಬೇಕೆಂಬುದೇ ನನ್ನ ಬಯಕೆಯಾಗಿದೆ. ನೀವು ನಿಮ್ಮ ಸಮಯ
ವನ್ನು ಬೇರೆ ಕಾರ್ಯಗಳಿಗೆ ಕೊಡದೆ ನಿಮ್ಮನ್ನು ಸಂಪೂರ್ಣವಾಗಿ
ಪ್ರಭುವಿಗೆ ಅರ್ಪಿಸಿಕೊಳ್ಳಬೇಕೆಂಬುದು ನನ್ನ ಅಪೇಕ್ಷೆಯಾಗಿದೆ.

36ತನ್ನ ಮಗಳ (ಕನ್ನಿಕೆಯ) ಮದುವೆಯ ವಯಸ್ಸು
ಮೀರಿಹೋಗುವಂತೆ ಬಿಟ್ಟುಕೊಡುವುದು ಒಳ್ಳೆಯದಲ್ಲ
ವೆಂದೂ, ಆಕೆಗೆ ಮದುವೆ ಮಾಡಿಸುವುದು ಅವಶ್ಯಕವೆಂದೂ
ಒಬ್ಬನು ಭಾವಿಸಿದರೆ, ಅವನು ತನ್ನ ಇಚ್ಛೆಗನುಸಾರವಾಗಿ
ಮಾಡಲಿ. ಅವನು ಅವರಿಗೆ ಮದುವೆ ಮಾಡಿಕೊಡಲಿ. ಅದು
ಪಾಪವಲ್ಲ. 37ಆದರೆ ಮತ್ತೊಬ್ಬನು ಮದುವೆಯ ಅಗತ್ಯವಿಲ್ಲ
ವೆಂದು ತನ್ನ ಮನಸ್ಸಿನಲ್ಲಿ ದೃಢವಾಗಿ ನಿಶ್ಚಯಿಸಿಕೊಂಡಿದ್ದರೆ
ಅವನು ತನ್ನ ಇಚ್ಛೆಗನುಸಾರವಾಗಿ ಮಾಡಲು ಸ್ವತಂತ್ರ
ನಾಗಿದ್ದಾನೆ. ಅವನು ತನ್ನ ಮಗಳಿಗೆ (ಕನ್ನಿಕೆಗೆ) ಮದುವೆ
ಮಾಡುವುದಿಲ್ಲವೆಂದು ತನ್ನ ಹೃದಯದಲ್ಲಿ ನಿರ್ಧರಿಸಿದ್ದರೆ
ಅವನು ಒಳ್ಳೆಯದನ್ನೇ ಮಾಡುತ್ತಿದ್ದಾನೆ. 38ಆದ್ದರಿಂದ ಒಬ್ಬನು
ತನ್ನ ಮಗಳಿಗೆ (ಕನ್ನಿಕೆಗೆ) ಮದುವೆಮಾಡಿಕೊಡುವುದು
ಒಳ್ಳೆಯದಾಗಿದೆ. ಅಲ್ಲದೆ ತನ್ನ ಮಗಳಿಗೆ (ಕನ್ನಿಕೆಗೆ) ಮದುವೆ
ಮಾಡಿಕೊಡದಿರುವುದು ಮತ್ತಷ್ಟು ಒಳ್ಳೆಯದಾಗಿದೆ.*

39ಗಂಡನು ಬದುಕಿರುವ ತನಕ ಹೆಂಡತಿಯು ಅವನೊಂದಿಗೆ
ಬಾಳ್ವೆ ನಡೆಸಬೇಕು. ಆದರೆ ಗಂಡನು ಸತ್ತುಹೋದರೆ, ಆ
ಸ್ತ್ರೀಯು ತಾನು ಬಯಸಿದವರನ್ನು ಮದುವೆಯಾಗಲು ಸ್ವತಂತ್ರ
ಳಾಗಿದ್ದಾಳೆ. ಆದರೆ ಅವನು ಪ್ರಭುವನ್ನು ಅನುಸರಿಸುವವ
ನಾಗಿರಬೇಕು. 40ಆಕೆಯು ಮತ್ತೆ ಮದುವೆ ಮಾಡಿಕೊಳ್ಳದಿದ್ದರೆ
ಹೆಚ್ಚು ಸಂತೋಷದಿಂದಿರುವಳು. ಇದು ನನ್ನ ಅಭಿಪ್ರಾಯ
ವಾಗಿದೆ. ದೇವರಾತ್ಮನು ನನ್ನೊಳಗಿದ್ದಾನೆಂದು ನಾನು
ನಂಬುತ್ತೇನೆ.

### ವಿಗ್ರಹಗಳಿಗೆ ಅರ್ಪಿತವಾದ ಆಹಾರದ ಬಗ್ಗೆ ಚರ್ಚೆ

8 ವಿಗ್ರಹಗಳಿಗೆ ಯಜ್ಞ ಮಾಡಿದ ಪಶುವಿನ ಮಾಂಸದ ಬಗ್ಗೆ
ಈಗ ನಾನು ಬರೆಯುತ್ತೇನೆ. ‘‘ನಮಗೆಲ್ಲರಿಗೂ ಜ್ಞಾನ
ವಿದೆ’’ ಎಂಬುದು ನಮಗೆ ಗೊತ್ತಿದೆ. ‘‘ಜ್ಞಾನವು’’ ನಮ್ಮನ್ನು
ಅಹಂಕಾರದಿಂದ ತುಂಬಿಸುತ್ತದೆ. ಆದರೆ ಪ್ರೀತಿಯು ಬೇರೆ
ಯವರಲ್ಲಿ ಭಕ್ತಿವೃದ್ಧಿಯನ್ನು ಮಾಡುತ್ತದೆ. 2ಇಂಥಿಂಥದ್ದನ್ನು
ತಿಳಿದುಕೊಂಡಿದ್ದೇನೆಂದು ಭಾವಿಸುವವನು ತಾನು ತಿಳಿದುಕೊಳ್ಳ
ಬೇಕಾದ ರೀತಿಯಲ್ಲಿ ಇನ್ನೂ ತಿಳಿದುಕೊಂಡಿಲ್ಲ. 3ಯಾವನು

---

**ವಚನ 36-38** ಇದನ್ನು ಈ ರೀತಿಯಾಗಿಯೂ ಅನುವಾದಿಸಬಹುದು: ಒಬ್ಬನು ತನಗೆ ನಿಶ್ಚಿತವಾದ ಕನ್ನಿಕೆಯೊಡನೆ ತಾನು ಸರಿಯಾದ ರೀತಿಯಲ್ಲಿ ವರ್ತಿಸುತ್ತಿಲ್ಲವೆಂದೂ ಆಕೆಗೆ ಮದುವೆಯ ವಯಸ್ಸು ಮೀರಿಹೋಗುತ್ತಿದೆಯೆಂದೂ, ಆದ್ದರಿಂದ, ಆಕೆಯನ್ನು ತಾನು ಮದುವೆಯಾಗಬೇಕೆಂದೂ ಯೋಚಿಸಿದರೆ, ಅವನು ತನ್ನ ಇಚ್ಛೆಗನುಸಾರವಾಗಿ ಮಾಡಲಿ. ಅವರು ಮದುವೆಯಾಗಬೇಕು. ಅದು ಪಾಪವಲ್ಲ. ಆದರೆ ಮತ್ತೊಬ್ಬನು ತನಗೆ ಮದುವೆಯ ಅಗತ್ಯವಿಲ್ಲವೆಂದು ತನ್ನ ಮನಸ್ಸಿನಲ್ಲಿ ದೃಢವಾಗಿ ನಿಶ್ಚಯಿಸಿಕೊಂಡಿದ್ದರೆ ಅವನು ತನ್ನ ಇಚ್ಛೆಗನುಸಾರವಾಗಿ ಮಾಡಲು ಸ್ವತಂತ್ರನಾಗಿದ್ದಾನೆ. ಈ ವ್ಯಕ್ತಿಯು ತನಗೆ ನಿಶ್ಚಿತವಾದ ಕನ್ನಿಕೆಯೊಂದಿಗೆ ತಾನು ಮದುವೆಯಾಗುವುದಿಲ್ಲವೆಂದು ನಿರ್ಧರಿಸಿದರೆ ಅವನು ಒಳ್ಳೆಯದನ್ನೇ ಮಾಡುತ್ತಿದ್ದಾನೆ. ಆದ್ದರಿಂದ ತನಗೆ ನಿಶ್ಚಿತವಾದ ಕನ್ಯೆಯನ್ನು ಮದುವೆಯಾಗುವುದು ಒಳ್ಳೆಯದು; ಮದುವೆಯಾಗದಿರುವುದು ಮತ್ತಷ್ಟು ಒಳ್ಳೆಯದು.

ದೇವರನ್ನು ಪ್ರೀತಿಸುತ್ತಾನೋ ಅವನನ್ನು ದೇವರು ತಿಳಿದು
ಕೊಂಡಿದ್ದಾನೆ.

4ಹೀಗಿರಲಾಗಿ, ವಿಗ್ರಹಗಳಿಗೆ ಅರ್ಪಿಸಿದ ಮಾಂಸ
ತಿನ್ನುವುದರ ಬಗ್ಗೆ ನಾನು ಹೇಳುವುದೇನೆಂದರೆ: ಜಗತ್ತಿನಲ್ಲಿ
ವಿಗ್ರಹವು ಕ್ಷುಲ್ಲಕವಾದದ್ದೆಂದು ನಮಗೆ ಗೊತ್ತಿದೆ. ಒಬ್ಬನೇ ಒಬ್ಬ
ದೇವರಿದ್ದಾನೆ ಎಂಬುದು ನಮಗೆ ಗೊತ್ತಿದೆ. 5ಆಕಾಶದಲ್ಲಾಗಲಿ
ಭೂಮಿಯ ಮೇಲಾಗಲಿ ದೇವರುಗಳೆಂದು ಕರೆಯಲ್ಪಡುವ
ವಸ್ತುಗಳಿದ್ದರೆ ಅವು ನಿಜವಾಗಿಯೂ ನಮಗೆ ಮುಖ್ಯವಲ್ಲ.
(ಅನೇಕ ವಸ್ತುಗಳನ್ನು ಜನರು ‘ದೇವರು’ಗಳೆಂತಲೂ ‘ಪ್ರಭು’
ಗಳೆಂತಲೂ ಕರೆಯುತ್ತಾರೆ.) 6ನಮಗಾದರೋ ಒಬ್ಬನೇ ಒಬ್ಬ
ದೇವರಿದ್ದಾನೆ. ಆತನು ನಮ್ಮ ತಂದೆ. ಸಮಸ್ತವನ್ನು ಆತನೇ ಸೃಷ್ಟಿ
ಮಾಡಿದನು. ನಾವು ಆತನಿಗೋಸ್ಕರ ಜೀವಿಸುತ್ತೇವೆ. ಒಬ್ಬನೇ
ಒಬ್ಬ ಪ್ರಭುವಿದ್ದಾನೆ. ಆತನೇ ಯೇಸು ಕ್ರಿಸ್ತನು. ಆತನ
ಮೂಲಕವಾಗಿ ಸಮಸ್ತವು ಉಂಟಾಯಿತು. ಆತನ ಮೂಲಕ
ವಾಗಿ ನಾವು ಜೀವವನ್ನು ಹೊಂದಿದ್ದೇವೆ.

7ಆದರೆ ಎಲ್ಲಾ ಜನರಿಗೆ ಇದರ ಬಗ್ಗೆ ತಿಳಿದಿಲ್ಲ. ಕೆಲವು
ಜನರು ಇಂದಿನವರೆಗೂ ವಿಗ್ರಹಗಳನ್ನು ಆರಾಧಿಸುವ ರೂಢಿ
ಯಲ್ಲಿದ್ದಾರೆ. ಹೀಗಿರಲಾಗಿ, ಆ ಜನರು ಮಾಂಸವನ್ನು ತಿನ್ನುವಾಗ
ಅದು ವಿಗ್ರಹಕ್ಕೆ ಅರ್ಪಿತವಾದದ್ದೆಂದು ಆಲೋಚಿಸುತ್ತಾರೆ.
ಆದರೆ ಈ ಮಾಂಸವನ್ನು ತಿನ್ನುವುದು ತಪ್ಪಲ್ಲ ಎಂಬ ದೃಢ ನಂಬಿಕೆ
ಅವರಲ್ಲಿಲ್ಲ. ಆದ್ದರಿಂದ, ಅವರು ಆ ಮಾಂಸವನ್ನು ತಿನ್ನುವಾಗ
ತಮ್ಮನ್ನು ದೋಷಿಗಳೆಂದು ಭಾವಿಸಿಕೊಳ್ಳುತ್ತಾರೆ. 8ಆದರೆ
ಆಹಾರವು ನಮ್ಮನ್ನು ದೇವರ ಸಮೀಪಕ್ಕೆ ತರಲಾರದು. ನಾವು
ಮಾಂಸವನ್ನು ತಿನ್ನದಿದ್ದರೆ, ನಮ್ಮ ಮೇಲೆ ದೇವರಿಗಿರುವ
ಮೆಚ್ಚುಗೆಯು ಕಡಿಮೆಯೇನೂ ಆಗುವುದಿಲ್ಲ. ಅದೇ ರೀತಿ,
ಮಾಂಸವನ್ನು ತಿಂದರೆ, ನಮ್ಮ ಮೇಲೆ ದೇವರಿಗಿರುವ
ಮೆಚ್ಚುಗೆಯು ಹೆಚ್ಚೇನೂ ಆಗುವುದಿಲ್ಲ.

9ಆದರೆ ನಿಮ್ಮ ಸ್ವತಂತ್ರದ ಬಗ್ಗೆ ಎಚ್ಚರಿಕೆಯಿಂದಿರಿ.
ನಂಬಿಕೆಯಲ್ಲಿ ಬಲಹೀನರಾಗಿರುವ ಜನರನ್ನು ನಿಮ್ಮ ಸ್ವತಂತ್ರವು
ಪಾಪಕ್ಕೆ ಬೀಳಿಸುವ ಸಾಧ್ಯತೆಯಿದೆ. 10ನಿಮಗೆ ತಿಳಿವಳಿಕೆ ಇರುವು
ದರಿಂದ ನೀವು ವಿಗ್ರಹದ ಗುಡಿಯೊಂದರಲ್ಲಿ ಸಂಕೋಚವಿಲ್ಲದೆ
ಊಟ ಮಾಡಬಹುದು. ನೀವು ಅಲ್ಲಿ ಊಟ ಮಾಡುವುದನ್ನು
ನಂಬಿಕೆಯಲ್ಲಿ ಬಲಹೀನನಾದ ವ್ಯಕ್ತಿಯೊಬ್ಬನು ನೋಡಿ,
ವಿಗ್ರಹಗಳಿಗೆ ಅರ್ಪಿತವಾದ ಮಾಂಸವನ್ನು ತಿನ್ನಲು ಪ್ರೋತ್ಸಾಹ
ಗೊಳ್ಳಬಹುದು. ಆದರೆ ಅದನ್ನು ತಿನ್ನಕೂಡದೆಂಬ ಭಾವನೆ
ಅವನಲ್ಲಿ ಆಳವಾಗಿ ಬೇರೂರಿದೆ. 11ಹೀಗಿರಲಾಗಿ, ಈ ಬಲಹೀನ
ಸಹೋದರನು ನಿಮ್ಮ ಜ್ಞಾನದ ದೆಸೆಯಿಂದ ಹಾಳಾದನು.
ಕ್ರಿಸ್ತನು ಈ ಸಹೋದರನಿಗೋಸ್ಕರವಾಗಿ ತನ್ನ ಪ್ರಾಣವನ್ನೇ
ಕೊಟ್ಟಿದ್ದಾನೆ. 12ಹೀಗೆ ನಿಮ್ಮ ಸಹೋದರ ಸಹೋದರಿಯರಿಗೆ
ವಿರೋಧವಾಗಿ ಪಾಪ ಮಾಡುವಾಗ ಮತ್ತು ಅವರು ತಪ್ಪೆಂದು
ಭಾವಿಸುವ ಕಾರ್ಯಗಳನ್ನು ಮಾಡುವಂತೆ ಅವರನ್ನು
ಪ್ರೋತ್ಸಾಹಿಸಿ ಅವರಿಗೆ ಕೇಡನ್ನು ಉಂಟುಮಾಡುವಾಗ ನೀವು
ಕ್ರಿಸ್ತನಿಗೆ ವಿರೋಧವಾಗಿಯೂ ಪಾಪ ಮಾಡುವವರಾಗಿದ್ದೀರಿ.
13ಹೀಗಿರಲಾಗಿ, ನಾನು ತಿನ್ನುವ ಆಹಾರವು ನನ್ನ ಸಹೋದರ
ನನ್ನು ಪಾಪಕ್ಕೆ ಬೀಳಿಸುವುದಾಗಿದ್ದರೆ, ನಾನು ಎಂದಿಗೂ ಮಾಂಸ
ವನ್ನೇ ತಿನ್ನುವುದಿಲ್ಲ. ನನ್ನ ಸಹೋದರನ ಪಾಪಕ್ಕೆ ನಾನು ಕಾರಣ
ನಾಗಬಾರದೆಂದು ನಾನು ಮಾಂಸ ತಿನ್ನುವುದನ್ನು ನಿಲ್ಲಿಸುತ್ತೇನೆ.

9 ನಾನು ಸ್ವತಂತ್ರನಾಗಿದ್ದೇನೆ; ಅಪೊಸ್ತಲನಾಗಿದ್ದೇನೆ; ನಮ್ಮ
ಪ್ರಭುವಾದ ಯೇಸುವನ್ನು ನೋಡಿದ್ದೇನೆ. ನಾನು ಪ್ರಭುವಿ
ನಲ್ಲಿ ಮಾಡಿದ ಸೇವೆಯ ಫಲವು ನೀವೇ ಆಗಿದ್ದೀರಿ. 2ಇತರ
ಜನರು ನನ್ನನ್ನು ಅಪೊಸ್ತಲನನ್ನಾಗಿ ಸ್ವೀಕರಿಸಿಕೊಳ್ಳದಿರ
ಬಹುದು. ಆದರೆ ನೀವಂತೂ ಖಂಡಿತವಾಗಿ ನನ್ನನ್ನು
ಅಪೊಸ್ತಲನನ್ನಾಗಿ ಸ್ವೀಕರಿಸಿಕೊಳ್ಳುವಿರಿ. ನಾನು ಪ್ರಭುವಿನಲ್ಲಿ
ಅಪೊಸ್ತಲನಾಗಿದ್ದೇನೆ ಎಂಬುದಕ್ಕೆ ನೀವೇ ಆಧಾರವಾಗಿದ್ದೀರಿ.

3ಕೆಲವು ಜನರು ನಮ್ಮನ್ನು ವಿಚಾರಣೆ ಮಾಡಲು ಬಯಸು
ತ್ತಾರೆ. ನಾನು ಅವರಿಗೆ ಕೊಡುವ ಉತ್ತರ ಇಂತಿದೆ: 4ಊಟ
ಮಾಡುವುದಕ್ಕೆ ಮತ್ತು ಪಾನೀಯಗಳನ್ನು ಕುಡಿಯುವುದಕ್ಕೆ
ನಮಗೆ ಹಕ್ಕಿಲ್ಲವೇ? 5ಕ್ರಿಸ್ತ ವಿಶ್ವಾಸಿಯಾದ ಹೆಂಡತಿಯನ್ನು
ನಮ್ಮೊಂದಿಗೆ ಪ್ರಯಾಣದಲ್ಲಿ ಕರೆದುಕೊಂಡು ಹೋಗಲು
ಉಳಿದ ಅಪೊಸ್ತಲರಂತೆ, ಪ್ರಭುವಿನ ಸಹೋದರರಂತೆ ಮತ್ತು
ಕೇಫನಂತೆ ನಮಗೆ ಹಕ್ಕಿಲ್ಲವೇ? 6ಬಾರ್ನಬನು ಮತ್ತು ನಾನು
ಮಾತ್ರ ನಮ್ಮ ಜೀವನಕ್ಕೆ ಬೇಕಾದದ್ದನ್ನು ದುಡಿದು ಸಂಪಾದಿಸಿ
ಕೊಳ್ಳಬೇಕೇ? 7ಸೈನ್ಯದಲ್ಲಿ ಸೇವೆ ಮಾಡುವ ಯಾವ ಸೈನಿಕ
ನಾದರೂ ತನಗೆ ತಾನೇ ಸಂಬಳವನ್ನು ಕೊಡುವುದಿಲ್ಲ. ಯಾವ
ದ್ರಾಕ್ಷಿತೋಟಗಾರನಾಗಲಿ ತಾನು ಬೆಳೆದ ಹಣ್ಣಿನಲ್ಲಿ ಸ್ವಲ್ಪವನ್ನು
ತಿನ್ನದೆ ಇರುವುದಿಲ್ಲ. ಹಸುಗಳನ್ನು ಸಾಕಿದ ಯಾವನೇ ಆಗಲೀ
ಅವುಗಳ ಹಾಲಿನಲ್ಲಿ ಸ್ವಲ್ಪವನ್ನು ಕುಡಿಯದೆ ಇರುವುದಿಲ್ಲ.

8ಇವುಗಳು ಕೇವಲ ಮಾನುಷ ಉದಾಹರಣೆಗಳಲ್ಲ. ದೇವರ
ಧರ್ಮಶಾಸ್ತ್ರವೂ ಈ ಸಂಗತಿಗಳನ್ನು ತಿಳಿಸುತ್ತದೆ. 9“ಕಣ ತುಳಿ
ಯುವ ಎತ್ತು ಧಾನ್ಯತಿನ್ನದಂತೆ ಅದರ ಬಾಯನ್ನು ಕಟ್ಟಬೇಡಿ”*
ಎಂದು ಮೋಶೆಯ ಧರ್ಮಶಾಸ್ತ್ರದಲ್ಲಿ ಬರೆದದೆ. ದೇವರು ಹೀಗೆ
ಹೇಳಿದಾಗ, ಕಣತುಳಿಯುವ ಎತ್ತಿನ ಬಗ್ಗೆ ಮಾತ್ರ ಆತನು
ಆಲೋಚಿಸುತ್ತಿದ್ದನೇ? ಇಲ್ಲ! 10ಆತನು ನಿಜವಾಗಿಯೂ ನಮ್ಮ
ಬಗ್ಗೆ ಮಾತಾಡುತ್ತಿದ್ದನು. ಹೌದು, ಪವಿತ್ರ ಗ್ರಂಥವು ನಮ
ಗೋಸ್ಕರ ಬರೆಯಲ್ಪಟ್ಟಿದೆ. ಉಳುವವನು ಮತ್ತು ಒಕ್ಕುವವನು
ತಮ್ಮ ಕೆಲಸಕ್ಕೆ ಸ್ವಲ್ಪ ಧಾನ್ಯ ದೊರೆಯುತ್ತದೆ ಎಂದು
ನಿರೀಕ್ಷಿಸುತ್ತಾರೆ. 11ನಾವು ನಿಮ್ಮ ಮಧ್ಯದಲ್ಲಿ ಆತ್ಮಿಕ ಬೀಜವನ್ನು
ಬಿತ್ತಿದೆವು. ಆದ್ದರಿಂದ ಈ ಜೀವನಕ್ಕೆ ಬೇಕಾದ ದೈನಂದಿನ
ಅಗತ್ಯತೆಗಳನ್ನು ನಿಮ್ಮಿಂದ ನಾವು ಪಡೆದುಕೊಳ್ಳಬೇಕು. ಖಂಡಿತ
ವಾಗಿ ಇದು ಹೆಚ್ಚೇನೂ ಅಲ್ಲ. 12ತಮಗೆ ಅಗತ್ಯವಾದುವುಗಳನ್ನು
ನಿಮ್ಮಿಂದ ಪಡೆದುಕೊಳ್ಳಲು ಇತರರಿಗೆ ಹಕ್ಕಿದೆ. ಆದ್ದರಿಂದ
ಖಂಡಿತವಾಗಿ ನಮಗೂ ಈ ಹಕ್ಕಿದೆ. ಆದರೆ ನಾವು ಈ ಹಕ್ಕನ್ನು
ಉಪಯೋಗಿಸುವುದಿಲ್ಲ. ಕ್ರಿಸ್ತನ ಸುವಾರ್ತೆಗೆ ವಿಧೇಯರಾಗಲು
ಯಾರಿಗೂ ತೊಂದರೆ ಆಗಕೂಡದೆಂದು ನಾವು ಪ್ರತಿ
ಯೊಂದನ್ನು ಸಹಿಸಿಕೊಳ್ಳುತ್ತೇವೆ. 13ದೇವಾಲಯದಲ್ಲಿ ಸೇವೆ
ಮಾಡುವ ಜನರು ದೇವಾಲಯದಿಂದಲೇ ತಮ್ಮ ಆಹಾರವನ್ನು
ಪಡೆದುಕೊಳ್ಳುತ್ತಾರೆ ಎಂಬುದು ನಿಮಗೆ ನಿಶ್ಚಯವಾಗಿ
ತಿಳಿದಿಲ್ಲವೇ? ಯಜ್ಞವೇದಿಕೆಯ ಬಳಿ ಸೇವೆ ಮಾಡುವವರು
ಯಜ್ಞವೇದಿಕೆಯ ಮೇಲೆ ಅರ್ಪಿತವಾದದ್ದರಲ್ಲಿ ಸ್ವಲ್ಪಭಾಗವನ್ನು
ಪಡೆದುಕೊಳ್ಳುವರು. 14ಸುವಾರ್ತೆಯನ್ನು ಬೋಧಿಸುವ
ಜನರಿಗೂ ಇದೇ ನಿಯಮ ಅನ್ವಯಿಸುತ್ತದೆ. ಸುವಾರ್ತೆಯನ್ನು
ಬೋಧಿಸುವವರು ತಮಗೆ ಅಗತ್ಯವಾದುವುಗಳನ್ನು ಈ ಸೇವೆಯ
ಮೂಲಕ ಪಡೆದುಕೊಳ್ಳಬೇಕೆಂದು ಪ್ರಭುವು ಆಜ್ಞಾಪಿಸಿದ್ದಾನೆ.

**ಕಣ … ಕಟ್ಟಬೇಡಿ** ಧರ್ಮೋಪದೇಶ. 25:4.

15ಆದರೆ ನಾನಂತೂ ಈ ಹಕ್ಕುಗಳಲ್ಲಿ ಒಂದನ್ನೂ ಉಪ
ಯೋಗಿಸಲಿಲ್ಲ. ನನಗೆ ಅಗತ್ಯವಾದುವುಗಳನ್ನು ಪಡೆದುಕೊಳ್ಳು
ವುದಕ್ಕಾಗಿಯೂ ನಾನು ಪ್ರಯತ್ನಿಸುತ್ತಿಲ್ಲ. ನಿಮಗೆ ಇದನ್ನು
ಬರೆಯುತ್ತಿರುವ ಉದ್ದೇಶವೂ ಅದಲ್ಲ. ಹೆಮ್ಮೆಪಡುವುದಕ್ಕೆ
ನನಗಿರುವ ಕಾರಣವನ್ನು ಕಳೆದುಕೊಳ್ಳುವುದಕ್ಕಿಂತ ಸಾಯು
ವುದೇ ನನಗೆ ಲೇಸು. 16ಸುವಾರ್ತೆಯನ್ನು ಬೋಧಿಸು
ತ್ತೇನೆಂಬುದು ಹೆಮ್ಮೆಪಡುವುದಕ್ಕೆ ನನಗಿರುವ ಕಾರಣವಲ್ಲ.
ಸುವಾರ್ತೆಯನ್ನು ಬೋಧಿಸುವುದು ನನ್ನ ಕರ್ತವ್ಯವಾಗಿದೆ.
ಅದನ್ನು ನಾನು ಮಾಡಲೇಬೇಕು. ನಾನು ಸುವಾರ್ತೆಯನ್ನು
ಬೋಧಿಸದಿದ್ದರೆ, ನನ್ನ ಗತಿಯನ್ನು ಏನು ಹೇಳಲಿ! 17ನಾನು
ನನ್ನ ಸ್ವಂತ ಇಷ್ಟದಿಂದ ಸುವಾರ್ತೆಯನ್ನು ಬೋಧಿಸುವು
ದಾಗಿದ್ದರೆ, ಬಹುಮಾನಕ್ಕೆ ಅರ್ಹನಾಗಿದ್ದೇನೆ. ಆದರೆ
ಬೇರೊಂದನ್ನು ಆರಿಸಿಕೊಳ್ಳಲು ನನಗೆ ಅವಕಾಶವೇ ಇಲ್ಲ.
ನಾನು ಸುವಾರ್ತೆಯನ್ನು ಸಾರಲೇ ಬೇಕು. ಇದು ನನಗೆ ಕೊಡ
ಲ್ಪಟ್ಟಿರುವ ಕರ್ತವ್ಯವಷ್ಟೇ. 18ಹೀಗಿರಲು, ನನಗೆ ಯಾವ ಬಹು
ಮಾನ ಸಿಕ್ಕುವುದು? ಸುವಾರ್ತೆಯನ್ನು ಉಚಿತವಾಗಿ
ಬೋಧಿಸುವುದೊಂದೇ ನನಗೆ ದೊರೆಯುವ ಬಹುಮಾನ
ವಾಗಿದೆ. ಆದ್ದರಿಂದ ಸುವಾರ್ತೆಯನ್ನು ಸಾರುವಾಗ ಅದರಿಂದ
ಜೀವನೋಪಾಯಕ್ಕಾಗಿ ನನಗಿರುವ ಹಕ್ಕನ್ನು ಬಳಸಿ
ಕೊಳ್ಳುವುದಿಲ್ಲ.

19ನಾನು ಸ್ವತಂತ್ರನಾಗಿದ್ದೇನೆ; ಯಾರ ಅಧೀನದಲ್ಲಿಯೂ
ಇಲ್ಲ. ಆದರೆ ನನ್ನಿಂದ ಸಾಧ್ಯವಾದಷ್ಟು ಜನರನ್ನು ರಕ್ಷಣಾ
ಮಾರ್ಗಕ್ಕೆ ನಡೆಸಲು ನನ್ನನ್ನು ಎಲ್ಲರಿಗೂ ಗುಲಾಮನನ್ನಾಗಿ
ಮಾಡಿಕೊಳ್ಳುತ್ತೇನೆ. 20ಯೆಹೂದ್ಯರನ್ನು ರಕ್ಷಣಾಮಾರ್ಗಕ್ಕೆ
ತರಲು ಅವರಿಗೆ ಯೆಹೂದ್ಯನಂತಾದೆನು. ನಾನು ಧರ್ಮಶಾಸ್ತ್ರಕ್ಕೆ
ಅಧೀನನಾಗಿಲ್ಲದಿದ್ದರೂ ಧರ್ಮಶಾಸ್ತ್ರಕ್ಕೆ ಅಧೀನರಾಗಿರುವ
ಜನರನ್ನು ರಕ್ಷಣಾಮಾರ್ಗಕ್ಕೆ ತರಬೇಕೆಂದು ಧರ್ಮಶಾಸ್ತ್ರಕ್ಕೆ
ಅಧೀನನಾದೆನು. 21ಧರ್ಮಶಾಸ್ತ್ರವಿಲ್ಲದ ಜನರನ್ನು ರಕ್ಷಣಾ
ಮಾರ್ಗಕ್ಕೆ ನಡೆಸಬೇಕೆಂದು ಅವರಿಗೆ ಧರ್ಮಶಾಸ್ತ್ರವಿಲ್ಲದ
ವ್ಯಕ್ತಿಯಂತಾದೆನು. (ಆದರೆ ನಿಜವಾಗಿಯೂ, ನಾನು ಧರ್ಮ
ಶಾಸ್ತ್ರವಿಲ್ಲದವನಲ್ಲ. ನಾನು ಕ್ರಿಸ್ತನ ಧರ್ಮಶಾಸ್ತ್ರಕ್ಕೆ ಅಧೀನನಾಗಿ
ದ್ದೇನೆ.) 22ಬಲಹೀನರಾದ ಜನರನ್ನು ರಕ್ಷಣಾಮಾರ್ಗಕ್ಕೆ ನಡೆಸ
ಬೇಕೆಂದು ಅವರಿಗೆ ಬಲಹೀನನಂತಾದೆನು. ಯಾವ ರೀತಿಯ
ಲ್ಲಾದರೂ ರಕ್ಷಣಾ ಮಾರ್ಗಕ್ಕೆ ನಡೆಸಬೇಕೆಂದು ಯಾರ್ಯಾರಿಗೆ
ಎಂಥೆಂಥವನಾಗಬೇಕೊ ಅಂಥಂಥವನಾದೆನು. 23ಇವುಗಳ
ನ್ನೆಲ್ಲ ಮಾಡುವುದು ಸುವಾರ್ತೆಗಾಗಿಯೇ. ಸುವಾರ್ತೆಯ
ಆಶೀರ್ವಾದಗಳಲ್ಲಿ ಪಾಲುಗಾರನಾಗಬೇಕೆಂದು ಇವುಗಳನ್ನೆಲ್ಲ
ಮಾಡುತ್ತೇನೆ.

24ಓಟದ ಸ್ಪರ್ಧೆಯಲ್ಲಿ ಎಲ್ಲಾ ಓಟಗಾರರು ಓಡು
ತ್ತಾರೆಂಬುದು ನಿಮಗೆ ಗೊತ್ತಿದೆ. ಆದರೆ ಅವರಲ್ಲಿ ಒಬ್ಬನು
ಮಾತ್ರ ಬಹುಮಾನವನ್ನು ಪಡೆದುಕೊಳ್ಳುತ್ತಾನೆ. ಆದ್ದರಿಂದ ಆ
ರೀತಿಯಲ್ಲಿ ಓಡಿರಿ; ಗೆಲ್ಲುವುದಕ್ಕಾಗಿ ಓಡಿರಿ. 25ಪಂದ್ಯಗಳಲ್ಲಿ
ಸ್ಪರ್ಧಿಸುವ ಕ್ರೀಡಾಪಟುಗಳು ಪದಕ ಗಳಿಸಲು ಕಟ್ಟುನಿಟ್ಟಾದ
ತರಬೇತಿಯಲ್ಲಿರುತ್ತಾರೆ. ಆದರೆ ಈ ಲೋಕದ ಆ ಪದಕವು
ಸ್ವಲ್ಪಕಾಲ ಮಾತ್ರ ಇರುತ್ತದೆ. ಆದರೆ ನಮ್ಮ ಪದಕವು ಶಾಶ್ವತ
ವಾದದ್ದು. 26ಆದ್ದರಿಂದ ಗುರಿಯನ್ನು ಹೊಂದಿರುವ ವ್ಯಕ್ತಿಯಂತೆ
ಓಡಿರಿ. ಕೇವಲ ಗಾಳಿಯನ್ನು ಗುದ್ದದೆ, ನಿಜವಾಗಿಯೂ ಗುದ್ದಿ
ಮುಷ್ಟಿಕಾಳಗ ಮಾಡುವ ವ್ಯಕ್ತಿಯಂತೆ ಹೋರಾಡುತ್ತೇನೆ.
27ನಾನು ಗುದ್ದುವುದು ನನ್ನ ಸ್ವಂತ ದೇಹವನ್ನೇ. ಇತರ ಜನರಿಗೆ
ಬೋಧಿಸಿದ ಮೇಲೆ ಸ್ವತಃ ನಾನೇ ತಿರಸ್ಕೃತನಾಗದಂತೆ ಅದನ್ನು
ನನ್ನ ಗುಲಾಮನನ್ನಾಗಿ ಮಾಡಿಕೊಳ್ಳುತ್ತೇನೆ.

## ಯೆಹೂದ್ಯರಂತಿರಬೇಡಿ

10 ಸಹೋದರ ಸಹೋದರಿಯರೇ, ಮೋಶೆಯನ್ನು
ಅನುಸರಿಸಿದ ನಮ್ಮ ಪಿತೃಗಳಿಗೆ ಏನು ಸಂಭವಿಸಿತೆಂಬು
ದನ್ನು ನೀವು ತಿಳಿದುಕೊಳ್ಳಬೇಕೆಂದು ನಾನು ಅಪೇಕ್ಷಿಸುತ್ತೇನೆ.
ಅವರೆಲ್ಲರೂ ಮೋಡದ ಕೆಳಗಿದ್ದರು; ಸಮುದ್ರದ ಮೂಲಕ
ನಡೆದುಕೊಂಡು ಹೋದರು; 2ಮೋಶೆಯ ಶಿಷ್ಯರಾಗು
ವುದಕ್ಕಾಗಿ ಮೋಡದಲ್ಲಿಯೂ ಸಮುದ್ರದಲ್ಲಿಯೂ ದೀಕ್ಷಾ
ಸ್ನಾನ ಹೊಂದಿದರು; 3ಒಂದೇ ಆತ್ಮಿಕ ಆಹಾರವನ್ನು ಊಟ
ಮಾಡಿದರು; 4ತಮ್ಮೊಂದಿಗಿದ್ದ ಆತ್ಮಿಕ ಬಂಡೆಯ ನೀರನ್ನು ಕುಡಿ
ದರು. ಆ ಬಂಡೆಯೇ ಕ್ರಿಸ್ತನು. 5ಆದರೂ ಅವರಲ್ಲಿ ಅನೇಕರು
ದೇವರ ಮೆಚ್ಚುಗೆಗೆ ಪಾತ್ರರಾಗಲಿಲ್ಲ. ಅವರು ಮರುಭೂಮಿ
ಯಲ್ಲಿ ಕೊಲ್ಲಲ್ಪಟ್ಟರು.

6ಅವರು ಮಾಡಿದಂತೆ ನಾವು ಕೆಟ್ಟವುಗಳನ್ನು ಆಶಿಸಬಾರ
ದೆಂಬುದಕ್ಕೆ ಈ ಘಟನೆಗಳು ನಮಗೆ ಎಚ್ಚರಿಕೆ ನೀಡುವ
ನಿದರ್ಶನಗಳಾಗಿವೆ. 7ಅವರಲ್ಲಿ ಕೆಲವರು ಮಾಡಿದಂತೆ ನೀವು
ವಿಗ್ರಹಗಳನ್ನು ಪೂಜಿಸಬೇಡಿ. “ಜನರು ತಿನ್ನಲು, ಕುಡಿಯಲು
ಕುಳಿತುಕೊಂಡರು; ನೃತ್ಯ ಮಾಡಲು ಎದ್ದುನಿಂತರು” * ಎಂದು
ಪವಿತ್ರ ಗ್ರಂಥದಲ್ಲಿ ಬರೆದಿದೆ. 8ಅವರಲ್ಲಿ ಕೆಲವರು ಮಾಡಿದಂತೆ
ನಾವು ಲೈಂಗಿಕ ಪಾಪಗಳನ್ನು ಮಾಡಬಾರದು. ಅವರಲ್ಲಿ ಇಪ್ಪತ್ತ
ಮೂರು ಸಾವಿರ ಮಂದಿ ತಮ್ಮ ಆ ಪಾಪದ ಫಲವಾಗಿ ಒಂದೇ
ದಿನದಲ್ಲಿ ಸತ್ತುಹೋದರು. 9ಅವರಲ್ಲಿ ಕೆಲವರು ಮಾಡಿದಂತೆ
ನಾವು ಪ್ರಭುವನ್ನು ಪರೀಕ್ಷಿಸಬಾರದು. ಅದರ ಫಲವಾಗಿ ಅವರು
ಹಾವುಗಳಿಂದ ಮರಣ ಹೊಂದಿದರು. 10ಅವರಲ್ಲಿ ಕೆಲವರು
ಮಾಡಿದಂತೆ ಗುಣಗುಟ್ಟಬೇಡಿ. ಆ ಜನರು ಸಂಹಾರಕ
ದೂತನಿಂದ ಕೊಲ್ಲಲ್ಪಟ್ಟರು.

11ಆ ಜನರಿಗೆ ಸಂಭವಿಸಿದ ಸಂಗತಿಗಳು ನಮಗೆ ನಿದರ್ಶನ
ಗಳಾಗಿವೆ. ನಮ್ಮನ್ನು ಎಚ್ಚರಿಸುವುದಕ್ಕಾಗಿ ಆ ಸಂಗತಿಗಳನ್ನು
ಬರೆದಿಡಲಾಗಿದೆ. ಈಗ ನಾವು ಯುಗದ ಅಂತಿಮಕಾಲದಲ್ಲಿ
ಜೀವಿಸುತ್ತಿದ್ದೇವೆ. 12ಆದ್ದರಿಂದ ತಾನು ದೃಢವಾಗಿ ನಿಂತಿದ್ದೇನೆ
ಎಂದು ಯೋಚಿಸುವ ವ್ಯಕ್ತಿಯು ಬೀಳದಂತೆ ಎಚ್ಚರಿಕೆಯಿಂದಿರ
ಬೇಕು. 13ಎಲ್ಲಾ ಜನರಿಗೆ ಬರುವಂತೆ ನಿಮಗೂ ಶೋಧನೆಗಳು
ಬರುತ್ತವೆ. ಆದರೆ ದೇವರು ನಂಬಿಗಸ್ತನಾಗಿದ್ದಾನೆ. ನೀವು ಸಹಿಸಿ
ಕೊಳ್ಳಲಾರದ ಶೋಧನೆಯನ್ನು ಆತನು ನಿಮಗೆ ಬರಗೊಡಿಸು
ವುದಿಲ್ಲ. ಶೋಧನೆಗಳು ಬಂದಾಗ, ಅವುಗಳಿಂದ ಪಾರಾಗುವ
ಮಾರ್ಗವನ್ನು ಸಹ ದೇವರು ನಿಮಗೆ ಒದಗಿಸುತ್ತಾನೆ. ಆಗ ನೀವು
ಅದನ್ನು ಸಹಿಸಿಕೊಳ್ಳುವುದಕ್ಕೆ ಶಕ್ತರಾಗುವಿರಿ.

14ಆದ್ದರಿಂದ, ನನ್ನ ಪ್ರಿಯ ಸ್ನೇಹಿತರೇ, ವಿಗ್ರಹಗಳ
ಪೂಜೆಯ ಬಗ್ಗೆ ಯೋಚಿಸಲೂಬೇಡಿ. 15ನೀವು ಬುದ್ಧಿವಂತ
ರೆಂದು ನಾನು ನಿಮ್ಮೊಂದಿಗೆ ಮಾತಾಡುತ್ತಿದ್ದೇನೆ. ನಾನು
ಹೇಳುವುದನ್ನು ಸ್ವತಃ ನೀವೇ ವಿಚಾರಣೆ ಮಾಡಿ. 16ನಾವು
ದ್ರಾಕ್ಷಾರಸದ ಪಾತ್ರೆಗಾಗಿ ದೇವರಿಗೆ ಸ್ತೋತ್ರ ಸಲ್ಲಿಸಿ

**ಜನರು … ಎದ್ದು ನಿಂತರು** ವಿಮೋಚನ. 32:6

ಕುಡಿಯುವಾಗ ಕ್ರಿಸ್ತನ ರಕ್ತದಲ್ಲಿ ಪಾಲುಗಾರರಾಗಲಿಲ್ಲವೇ?
ನಾವು ರೊಟ್ಟಿಯನ್ನು ಮುರಿದು ತಿನ್ನುವಾಗ ಕ್ರಿಸ್ತನ ದೇಹದಲ್ಲಿ
ಪಾಲುಗಾರರಾಗಲಿಲ್ಲವೇ? 17ರೊಟ್ಟಿಯು ಒಂದೇ. ಆದರೆ
ನಮ್ಮಲ್ಲಿ ಅನೇಕರಿದ್ದೇವೆ. ಹೀಗಿದ್ದರೂ, ನಾವೆಲ್ಲಾ ಆ ಒಂದೇ
ರೊಟ್ಟಿಯಲ್ಲಿ ಪಾಲು ತೆಗೆದುಕೊಳ್ಳುತ್ತೇವೆ. ಆದ್ದರಿಂದ ನಾವು
ನಿಜವಾಗಿಯೂ ಒಂದೇ ದೇಹವಾಗಿದ್ದೇವೆ.

18ಇಸ್ರೇಲ್ ಜನರ ಬಗ್ಗೆ ಯೋಚಿಸಿ. ಯಜ್ಞವಾಗಿ ಅರ್ಪಿತ
ವಾದುದನ್ನು ತಿನ್ನುವ ಆ ಜನರು ಯಜ್ಞವೇದಿಕೆಯಲ್ಲಿ ಪಾಲು
ಗಾರರಾಗಿಲ್ಲವೇ? 19ವಿಗ್ರಹಕ್ಕೆ ಅರ್ಪಿತವಾದ ಆಹಾರ
ಪದಾರ್ಥವು ಮುಖ್ಯವಾದದ್ದೆಂದು ನಾನು ಹೇಳುತ್ತಿಲ್ಲ. ಅಲ್ಲದೆ
ವಿಗ್ರಹವು ಮುಖ್ಯವಾದದ್ದು ಎಂಬ ಅಭಿಪ್ರಾಯವೂ ನನಗಿಲ್ಲ.
20ನಾನು ಹೇಳುತ್ತಿರುವುದೇನೆಂದರೆ, ಜನರು ವಿಗ್ರಹಗಳಿಗೆ
ಅರ್ಪಿಸಿದ ಪದಾರ್ಥಗಳು ದೆವ್ವಗಳಿಗೆ ಅರ್ಪಿತವಾದುವುಗಳೇ
ಹೊರತು ದೇವರಿಗಲ್ಲ. ನೀವು ದೆವ್ವಗಳೊಂದಿಗೆ ಯಾವ ವಿಷಯ
ದಲ್ಲಿಯೂ ಪಾಲುಹೊಂದಬಾರದೆಂಬುದು ನನ್ನ ಆಸೆ. 21ನೀವು
ಪ್ರಭುವಿನ ಪಾತ್ರೆ ಮತ್ತು ದೆವ್ವಗಳ ಪಾತ್ರೆ ಇವುಗಳೊಳಗೆ
ಒಂದರಲ್ಲಿಯೇ ಹೊರತು ಎರಡರಲ್ಲಿಯೂ ಕುಡಿಯಲಾಗದು.
ಪ್ರಭುವಿನ ಪಂಕ್ತಿ ಮತ್ತು ದೆವ್ವಗಳ ಪಂಕ್ತಿ ಇವುಗಳೊಳಗೆ ಒಂದ
ರಲ್ಲಿಯೇ ಹೊರತು ಎರಡರಲ್ಲಿಯೂ ಊಟ ಮಾಡಲಾರಿರಿ.
22ಪ್ರಭುವಿಗೆ ಅಸೂಯೆಯನ್ನು ಉಂಟು ಮಾಡಬೇಕೆಂದಿ
ದ್ದೀರೋ? ಆತನಿಗಿಂತಲೂ ನಾವು ಬಲಿಷ್ಠರಾಗಿದ್ದೇವೊ?
ಇಲ್ಲ!

### ನಿಮ್ಮ ಸ್ವತಂತ್ರ, ದೇವರ ಮಹಿಮೆಗೋಸ್ಕರ

23“ಎಲ್ಲಾ ಕಾರ್ಯಗಳನ್ನು ಮಾಡುವುದಕ್ಕೆ ಸ್ವತಂತ್ರವಿದೆ.”
ಆದರೆ ನಾವು ಮಾಡುವ ಕಾರ್ಯಗಳೆಲ್ಲಾ ಒಳ್ಳೆಯವೆಂದು ಹೇಳು
ವುದು ಸರಿಯಲ್ಲ. “ಎಲ್ಲಾ ಕಾರ್ಯಗಳನ್ನು ಮಾಡುವುದಕ್ಕೆ
ಸ್ವತಂತ್ರವಿದೆ.” ಆದರೆ ಕೆಲವು ಕಾರ್ಯಗಳು ಬೇರೆಯವರ
ಅಭಿವೃದ್ಧಿಗೆ ಸಹಾಯಕವಾಗಿರುವುದಿಲ್ಲ. 24ಪ್ರತಿಯೊಬ್ಬನೂ
ತನಗೆ ಮಾತ್ರ ಹಿತಕರವಾದ ಕಾರ್ಯಗಳನ್ನು ಮಾಡದೆ ಬೇರೆ
ಯವರಿಗೂ ಹಿತಕರವಾದ ಕಾರ್ಯಗಳನ್ನು ಮಾಡಲು
ಪ್ರಯತ್ನಿಸಬೇಕು.

25ಮಾಂಸದ ಮಾರುಕಟ್ಟೆಯಲ್ಲಿ ಮಾರುವ ಯಾವ ಮಾಂಸ
ವನ್ನಾದರೂ ತಿನ್ನಿರಿ. ನೀವು ತಿನ್ನಬಾರದೆಂದು ಯೋಚಿಸುವ
ಮಾಂಸದಂತೆ ಅದು ತೋರಿದರೂ ಆ ಮಾಂಸದ ಬಗ್ಗೆ ಯಾವ
ಪ್ರಶ್ನೆಗಳನ್ನೂ ಕೇಳಬೇಡಿರಿ. 26ನೀವು ಅದನ್ನು ತಿನ್ನಿರಿ.
ಏಕೆಂದರೆ, “ಭೂಮಿಯೂ ಅದರಲ್ಲಿರುವ ಸಮಸ್ತವೂ
ಪ್ರಭುವಿನದಾಗಿದೆ.”*

27ಕ್ರಿಸ್ತ ವಿಶ್ವಾಸಿಯಲ್ಲದ ಒಬ್ಬನು ನಿಮ್ಮನ್ನು ಊಟಕ್ಕೆ
ಆಹ್ವಾನಿಸಿದರೆ, ಹೋಗುವುದಕ್ಕೆ ನಿಮಗೆ ಇಷ್ಟವಿದ್ದರೆ, ಅವನು
ನಿಮಗೆ ಏನು ಬಡಿಸಿದರೂ ತಿನ್ನಿರಿ. ನೀವು ಆ ಪದಾರ್ಥವನ್ನು
ತಿನ್ನಬೇಕೇ? ಅಥವಾ ತಿನ್ನಬಾರದೇ ಎಂದು ನಿರ್ಧರಿಸಲು
ಪ್ರಶ್ನೆಗಳನ್ನು ಕೇಳಬೇಡಿ. 28ಆದರೆ ಒಬ್ಬನು ನಿಮಗೆ, “ಆ
ಪದಾರ್ಥವು ವಿಗ್ರಹಗಳಿಗೆ ಅರ್ಪಿತವಾದದ್ದು” ಎಂದು
ಹೇಳಿದರೆ, ನೀವು ಅದನ್ನು ತಿನ್ನಬೇಡಿ. ನಿಮಗೆ ಹೇಳಿದ ವ್ಯಕ್ತಿಯ
ನಂಬಿಕೆಯನ್ನು ಹಾಳುಮಾಡಲು ನಿಮಗೆ ಇಷ್ಟವಿಲ್ಲದ್ದರಿಂದ
ಮತ್ತು ಆ ಮಾಂಸವನ್ನು ತಿನ್ನುವುದು ತಪ್ಪೆಂದು ಜನರು
ಭಾವಿಸಿಕೊಂಡಿರುವುದರಿಂದ ನೀವು ಅದನ್ನು ತಿನ್ನಬಾರದು.
29ಆದರೆ ನೀವೇ ಆ ರೀತಿ ಭಾವಿಸಿಕೊಂಡಿದ್ದೀರಿ ಎಂದು ನಾನು
ಹೇಳುತ್ತಿಲ್ಲ. ಆದರೆ ಮತ್ತೊಬ್ಬ ವ್ಯಕ್ತಿಯು ಅದನ್ನು ತಿನ್ನುವುದು
ತಪ್ಪೆಂದು ಭಾವಿಸಿಕೊಂಡಿರುವುದರಿಂದ ಅವನ ಮನಸ್ಸಾಕ್ಷಿಯ
ದೆಸೆಯಿಂದ ನಮ್ಮ ಸ್ವತಂತ್ರವು ವಿಚಾರಣೆಗೆ ಗುರಿಯಾಗ
ಬಾರದು. 30ನಾನು ದೇವರಿಗೆ ಕೃತಜ್ಞತೆ ಸಲ್ಲಿಸಿ ಊಟ ಮಾಡಿದ
ಪದಾರ್ಥದಿಂದಾಗಿ ಖಂಡನೆಗೆ ಗುರಿಯಾಗಲು ನನಗೆ ಇಷ್ಟವಿಲ್ಲ.

31ಆದ್ದರಿಂದ ನೀವು ತಿಂದರೂ ಕುಡಿದರೂ ಏನೇ
ಮಾಡಿದರೂ ದೇವರ ಮಹಿಮೆಗಾಗಿ ಅದನ್ನು ಮಾಡಿರಿ. 32ಇತರ
ಜನರು ಅಂದರೆ ಯೆಹೂದ್ಯರಾಗಲಿ ಗ್ರೀಕರಾಗಲಿ ಅಥವಾ
ದೇವರ ಸಭೆಯವರಾಗಲಿ ತಪ್ಪು ಮಾಡಲು ಕಾರಣವಾಗು
ವಂಥದ್ದನ್ನು ನೀವೆಂದಿಗೂ ಮಾಡಬೇಡಿರಿ. 33ನಾನು ಸಹ
ಹಾಗೆಯೇ ಮಾಡುತ್ತೇನೆ. ಎಲ್ಲರನ್ನು ಎಲ್ಲಾ ವಿಷಯಗಳಲ್ಲಿ
ಮೆಚ್ಚಿಸಲು ನಾನು ಪ್ರಯತ್ನಿಸುತ್ತೇನೆ. ನನಗೆ ಹಿತಕರವಾದದ್ದನ್ನು
ಮಾಡಲು ಇಷ್ಟಪಡದೆ ಬಹು ಜನರಿಗೆ ಹಿತಕರವಾದದ್ದನ್ನೇ
ಮಾಡಲು ಪ್ರಯತ್ನಿಸುತ್ತೇನೆ. ಅವರು ರಕ್ಷಣೆ ಹೊಂದ
ಬೇಕೆಂಬುದೇ ನನ್ನ ಅಪೇಕ್ಷೆ.

11 ನಾನು ಕ್ರಿಸ್ತನ ಮಾದರಿಯನ್ನು ಅನುಸರಿಸುವಂತೆ
ನೀವೂ ನನ್ನ ಮಾದರಿಯನ್ನು ಅನುಸರಿಸಿರಿ.

### ಅಧಿಕಾರಕ್ಕೆ ಅಧೀನರಾಗಿರಿ

2ನೀವು ಎಲ್ಲಾ ವಿಷಯಗಳಲ್ಲಿ ನನ್ನನ್ನು ಜ್ಞಾಪಿಸಿಕೊಳ್ಳು
ವುದರಿಂದ ನಿಮ್ಮನ್ನು ಹೊಗಳುತ್ತೇನೆ. ನಾನು ನಿಮಗೆ ಕೊಟ್ಟ
ಉಪದೇಶಗಳನ್ನು ನೀವು ಸೂಕ್ಷ್ಮವಾಗಿ ಅನುಸರಿಸುತ್ತಿದ್ದೀರಿ.
3ಆದರೆ ನೀವು ಈ ವಿಷಯವನ್ನೂ ಅರ್ಥಮಾಡಿಕೊಳ್ಳ
ಬೇಕೆಂಬುದು ನನ್ನ ಆಸೆ. ಪ್ರತಿಯೊಬ್ಬ ಪುರುಷನಿಗೂ ಕ್ರಿಸ್ತನು
ಶಿರಸ್ಸಾಗಿದ್ದಾನೆ; ಸ್ತ್ರೀಗೆ ಪುರುಷನು ಶಿರಸ್ಸಾಗಿದ್ದಾನೆ; ಕ್ರಿಸ್ತನಿಗೆ
ದೇವರು ಶಿರಸ್ಸಾಗಿದ್ದಾನೆ. 4ಪುರುಷನು ಪ್ರವಾದಿಸುವಾಗ
ಅಥವಾ ಪ್ರಾರ್ಥಿಸುವಾಗ ತನ್ನ ತಲೆಯ ಮೇಲೆ ಮುಸುಕು
ಹಾಕಿಕೊಂಡರೆ ಅದು ಅವನ ಶಿರಸ್ಸಾದ ಕ್ರಿಸ್ತನಿಗೆ ಅಪಮಾನ
ಕರವಾಗಿದೆ. 5ಆದರೆ ಸ್ತ್ರೀಯು ಪ್ರಾರ್ಥಿಸುವಾಗ ಅಥವಾ
ಪ್ರವಾದಿಸುವಾಗ ತನ್ನ ತಲೆಗೆ ಮುಸುಕನ್ನು ಹಾಕಿಕೊಂಡಿರ
ಬೇಕು. ಆಕೆಯು ತನ್ನ ತಲೆಗೆ ಮುಸುಕು ಹಾಕಿಲ್ಲದಿದ್ದರೆ, ಅದು
ಆಕೆಯ ಶಿರಸ್ಸಾದ ಪುರುಷನಿಗೆ ಅಪಮಾನಕರವಾಗಿದೆ.
ತಲೆಯನ್ನು ಬೋಳಿಸಿಕೊಂಡಿರುವ ಸ್ತ್ರೀಗೂ ಅವಳಿಗೂ ಯಾವ
ವ್ಯತ್ಯಾಸವಿಲ್ಲ. 6ಸ್ತ್ರೀಯು ತನ್ನ ತಲೆಗೆ ಮುಸುಕು ಹಾಕಿಕೊಳ್ಳ
ದಿದ್ದರೆ, ಆಕೆಯು ತನ್ನ ತಲೆಯನ್ನು ಬೋಳಿಸಿಕೊಳ್ಳಲಿ. ತಲೆ
ಕೂದಲನ್ನು ಕತ್ತರಿಸಿಕೊಳ್ಳುವುದಾಗಲಿ ತಲೆಯನ್ನು ಬೋಳಿಸಿ
ಕೊಳ್ಳುವುದಾಗಲಿ ಸ್ತ್ರೀಗೆ ಅಪಮಾನಕರವಾಗಿದೆ. ಆದ್ದರಿಂದ ಆಕೆ
ತನ್ನ ತಲೆಗೆ ಮುಸುಕು ಹಾಕಿಕೊಳ್ಳಬೇಕು. 7ಆದರೆ ಪುರುಷನು
ತನ್ನ ತಲೆಗೆ ಮುಸುಕು ಹಾಕಿಕೊಳ್ಳಬಾರದು. ಏಕೆಂದರೆ,
ಪುರುಷನು ದೇವರ ಸ್ವರೂಪವಾಗಿದ್ದಾನೆ ಮತ್ತು ದೇವರ
ಪ್ರಭಾವವಾಗಿದ್ದಾನೆ. ಆದರೆ ಸ್ತ್ರೀಯು ಪುರುಷನ ಪ್ರಭಾವ
ವಾಗಿದ್ದಾಳೆ. 8ಪುರುಷನು ಸ್ತ್ರೀಯಿಂದ ಬಂದಿಲ್ಲ; ಸ್ತ್ರೀಯು
ಪುರುಷನಿಂದ ಬಂದಳು. 9ಪುರುಷನು ಸೃಷ್ಟಿಸಲ್ಪಟ್ಟದ್ದು ಸ್ತ್ರೀ
ಗೋಸ್ಕರವಲ್ಲ. ಆದರೆ ಸ್ತ್ರೀಯು ಪುರುಷನಿಗೋಸ್ಕರ

---

**ಭೂಮಿಯೂ ... ಪ್ರಭುವಿನದಾಗಿದೆ** ಕೀರ್ತನೆ 24:1; 50:12; 89:11.

ಸೃಷ್ಟಿಸಲ್ಪಟ್ಟಳು. 10ಆದಕಾರಣವೇ, ಸ್ತ್ರೀಯು ತಾನು ಅಧಿಕಾರದ
ಅಧೀನದಲ್ಲಿರುವುದನ್ನು ಸೂಚಿಸಲು ತನ್ನ ತಲೆಗೆ ಮುಸುಕು
ಹಾಕಿಕೊಳ್ಳಬೇಕು. ದೇವದೂತರ ನಿಮಿತ್ತವಾಗಿಯೂ ಸ್ತ್ರೀ ತನ್ನ
ತಲೆಗೆ ಮುಸುಕು ಹಾಕಿಕೊಳ್ಳಬೇಕು.
11ಆದರೆ ಪ್ರಭುವಿನ ದೃಷ್ಟಿಯಲ್ಲಿ ಸ್ತ್ರೀಯು ಪುರುಷನಿಗೆ
ಎಷ್ಟು ಮುಖ್ಯವೋ ಪುರುಷನೂ ಸ್ತ್ರೀಗೆ ಅಷ್ಟೇ ಮುಖ್ಯ.
12ಏಕೆಂದರೆ ಸ್ತ್ರೀಯು ಪುರುಷನಿಂದ ಬಂದದ್ದು ಸತ್ಯ. ಆದರೆ
ಪುರುಷನು ಸಹ ಸ್ತ್ರೀಯ ಮೂಲಕವಾಗಿ ಹುಟ್ಟುತ್ತಾನೆ. ನಿಜವಾಗಿ
ಸಮಸ್ತವೂ ದೇವರಿಂದಲೇ ಬರುತ್ತದೆ. 13ಹೀಗಿರಲಾಗಿ,
ಸ್ತ್ರೀಯು ತನ್ನ ತಲೆಗೆ ಮುಸುಕು ಹಾಕಿಕೊಳ್ಳದೆ ದೇವರಿಗೆ
ಪ್ರಾರ್ಥಿಸುವುದು ಸರಿಯಾದದ್ದೇ? ನೀವೇ ತೀರ್ಮಾನಿಸಿರಿ.
14ಮನುಷ್ಯನ ಸ್ವಭಾವವೇ ತಿಳಿಸುವಂತೆ ಉದ್ದನೆಯ ಕೂದಲನ್ನು
ಹೊಂದಿರುವುದು ಪುರುಷನಿಗೆ ಅವಮಾನಕರವಾಗಿದೆ. 15ಆದರೆ
ಉದ್ದನೆಯ ಕೂದಲನ್ನು ಹೊಂದಿರುವುದು ಸ್ತ್ರೀಗೆ ಗೌರವ
ಯುತವಾಗಿದೆ. ಉದ್ದನೆಯ ಕೂದಲನ್ನು ಸ್ತ್ರೀಯ ತಲೆಗೆ
ಮುಸುಕನ್ನಾಗಿ ಕೊಡಲಾಗಿದೆ. 16ಕೆಲವು ಜನರು ಇದರ
ಬಗ್ಗೆ ಇನ್ನೂ ವಾದ ಮಾಡಬಯಸಬಹುದು. ಆದರೆ ಈ
ಸಂಪ್ರದಾಯವು ನಮ್ಮಲ್ಲಾಗಲಿ ದೇವರ ಸಭೆಗಳಲ್ಲಾಗಲಿ ಇಲ್ಲ.

## ಪ್ರಭುವಿನ ರಾತ್ರಿಭೋಜನ

17ಈಗ ನಾನು ನಿಮಗೆ ಹೇಳಲಿರುವ ವಿಷಯದಲ್ಲಿ ನಿಮ್ಮನ್ನು
ಹೊಗಳುವುದಿಲ್ಲ. ನಿಮ್ಮ ಸಭಾಕೂಟಗಳು ನಿಮಗೆ ಒಳ್ಳೆಯ
ದನ್ನು ಮಾಡುವುದಕ್ಕಿಂತಲೂ ಹೆಚ್ಚು ಕೇಡುಗಳನ್ನೇ ಮಾಡು
ತ್ತವೆ. 18ಮೊದಲನೆಯದಾಗಿ, ನೀವು ಸಭೆಯಾಗಿ ಸೇರಿಬರು
ವಾಗ ನಿಮ್ಮಲ್ಲಿ ಪಂಗಡಗಳಿರುವುದಾಗಿ ಕೇಳಿದ್ದೇನೆ. ಇದು ನಿಜ
ವೆಂದು ಸ್ವಲ್ಪಮಟ್ಟಿಗೆ ನಂಬುತ್ತೇನೆ. 19(ನಿಮ್ಮಲ್ಲಿ ಭಿನ್ನಾಭಿ
ಪ್ರಾಯಗಳಿರುವುದು ಸಹಜ. ನಿಮ್ಮಲ್ಲಿ ಯಾರು ನಿಜವಾಗಿಯೂ
ಒಳ್ಳೆಯದನ್ನು ಮಾಡುತ್ತಿದ್ದಾರೆ ಎಂಬುದನ್ನು ಇದು ಸ್ಪಷ್ಟಪಡಿಸು
ತ್ತದೆ.) 20ನೀವೆಲ್ಲರೂ ಒಟ್ಟಾಗಿ ಸೇರಿದಾಗ ನೀವು ಮಾಡು
ವಂಥದ್ದು ನಿಜವಾಗಿಯೂ ಪ್ರಭುವಿನ ರಾತ್ರಿಭೋಜನವಲ್ಲ.
21ಏಕೆಂದರೆ, ನೀವು ಊಟ ಮಾಡುವಾಗ, ಇತರರಿಗೋಸ್ಕರ
ಕಾಯದೆ ಪ್ರತಿಯೊಬ್ಬರು ತಮ್ಮಷ್ಟಕ್ಕೆ ತಾವೇ ಊಟ ಮಾಡು
ತ್ತಾರೆ. ಕೆಲವು ಜನರಲ್ಲಿ ಊಟ ಮಾಡಲು ಸಾಕಷ್ಟು ಆಹಾರ
ಇರುವುದಿಲ್ಲ. ಇನ್ನು ಕೆಲವರಲ್ಲಿ ತಿಂದು, ಕುಡಿದು ಮತ್ತರಾಗು
ವಷ್ಟು ಆಹಾರವಿರುತ್ತದೆ. 22ನೀವು ನಿಮ್ಮ ಸ್ವಂತ ಮನೆಗಳಲ್ಲಿ
ತಿನ್ನಬಹುದು. ಕುಡಿಯಬಹುದು. ದೇವರ ಸಭೆಯು ಮುಖ್ಯ
ವಾದದ್ದಲ್ಲವೆಂದು ನೀವು ಯೋಚಿಸುವಂತೆ ತೋರುತ್ತದೆ. ನೀವು
ಬಡವರನ್ನು ನಾಚಿಕೆಗೆ ಗುರಿ ಮಾಡುತ್ತೀರಿ. ನಾನು ನಿಮಗೆ ಏನು
ಹೇಳಲಿ? ನೀವು ಮಾಡುತ್ತಿರುವ ಈ ಕಾರ್ಯಕ್ಕೋಸ್ಕರ ನಾನು
ನಿಮ್ಮನ್ನು ಹೊಗಳಬೇಕೇ? ನಾನು ನಿಮ್ಮನ್ನು ಹೊಗಳುವುದಿಲ್ಲ.
23ನಾನು ಪ್ರಭುವಿನಿಂದ ಹೊಂದಿಕೊಂಡದ್ದನ್ನೇ ನಿಮಗೆ
ಉಪದೇಶಿಸಿದೆನು. ಅದೇನೆಂದರೆ: ಯೇಸುವನ್ನು ಕೊಲ್ಲುವುದ
ಕ್ಕಾಗಿ ಒಪ್ಪಿಸಿಕೊಟ್ಟ ರಾತ್ರಿಯಲ್ಲಿ, ಆತನು ರೊಟ್ಟಿಯನ್ನು ತೆಗೆದು
ಕೊಂಡು, 24ಅದಕ್ಕಾಗಿ ಸ್ತೋತ್ರ ಸಲ್ಲಿಸಿ, ಅದನ್ನು ಮುರಿದು,
‘‘ಇದು ನನ್ನ ದೇಹ; ಇದನ್ನು ನಿಮಗೋಸ್ಕರ ಕೊಡಲಾಗಿದೆ.
ನನ್ನನ್ನು ನೆನಸಿಕೊಳ್ಳುವುದಕ್ಕಾಗಿ ಹೀಗೆ ಮಾಡಿರಿ’’ ಎಂದು
ಹೇಳಿದನು. 25ಅದೇ ರೀತಿಯಲ್ಲಿ ಅವರು ಊಟ ಮಾಡಿದ
ಮೇಲೆ ಯೇಸು ದ್ರಾಕ್ಷಾರಸದ ಪಾತ್ರೆಯನ್ನು ತೆಗೆದುಕೊಂಡು,
‘‘ದೇವರು ತನ್ನ ಜನರೊಂದಿಗೆ ಮಾಡಿಕೊಂಡ ಹೊಸ ಒಪ್ಪಂದ
ವನ್ನು ಈ ದ್ರಾಕ್ಷಾರಸ ಸೂಚಿಸುತ್ತದೆ. ಈ ಹೊಸ ಒಪ್ಪಂದ ನನ್ನ
ರಕ್ತದಿಂದ ಆರಂಭವಾಗುತ್ತದೆ. ನೀವು ಇದನ್ನು ಕುಡಿಯು
ವಾಗಲೆಲ್ಲಾ ನನ್ನನ್ನು ನೆನಸಿಕೊಳ್ಳುವವರಾಗಿದ್ದೀರಿ’’ ಎಂದು
ಹೇಳಿದನು. 26ನೀವು ಈ ರೊಟ್ಟಿಯನ್ನು ತಿಂದು ಈ ಪಾತ್ರೆಯಲ್ಲಿ
ಕುಡಿಯುವಾಗಲೆಲ್ಲಾ ಪ್ರಭುವಿನ ಮರಣವನ್ನು ಆತನು ಬರುವ
ತನಕ ಪ್ರಚುರಪಡಿಸುತ್ತೀರಿ.
27ಹೀಗಿರಲಾಗಿ ಒಬ್ಬನು ಪ್ರಭುವಿನ ರೊಟ್ಟಿಯನ್ನು
ತಿನ್ನುವಾಗ, ಪಾತ್ರೆಯಲ್ಲಿ ಕುಡಿಯುವಾಗ ಇವುಗಳ ನಿಜವಾದ
ಅರ್ಥವನ್ನು ಕಾರ್ಯಗಳ ಮೂಲಕ ತೋರ್ಪಡಿಸಬೇಕು,
ಇಲ್ಲವಾದರೆ ಅವನು ಪ್ರಭುವಿನ ದೇಹಕ್ಕೂ ರಕ್ತಕ್ಕೂ ದೋಷಿ
ಯಾಗುತ್ತಾನೆ. 28ಪ್ರತಿಯೊಬ್ಬ ವ್ಯಕ್ತಿಯು ರೊಟ್ಟಿಯನ್ನು ತಿನ್ನುವು
ದಕ್ಕಿಂತಲೂ ಪಾತ್ರೆಯಲ್ಲಿ ಕುಡಿಯುವುದಕ್ಕಿಂತಲೂ ಮುಂಚಿತ
ವಾಗಿ ತನ್ನ ಹೃದಯವನ್ನು ಪರಿಶೀಲಿಸಿಕೊಳ್ಳಬೇಕು. 29ಯಾವ
ನಾದರೂ ಪ್ರಭುವಿನ ದೇಹವೆಂದು ಗುರುತಿಸದೆ ರೊಟ್ಟಿಯನ್ನು
ತಿಂದರೆ ಮತ್ತು ದ್ರಾಕ್ಷಾರಸವನ್ನು ಕುಡಿದರೆ ಅವನು ತಿಂದದ್ದಕ್ಕೂ
ಕುಡಿದದ್ದಕ್ಕೂ ದೋಷಿಯೆಂಬ ತೀರ್ಪಿಗೆ ಒಳಗಾಗುತ್ತಾನೆ.
30ಆದಕಾರಣವೇ, ನಿಮ್ಮ ಸಭೆಯಲ್ಲಿರುವ ಅನೇಕರು
ರೋಗಿಗಳೂ ಬಲಹೀನರೂ ಆಗಿದ್ದಾರೆ ಮತ್ತು ಅನೇಕರು ಸತ್ತು
ಹೋದರು. 31ಆದರೆ ನಮ್ಮನ್ನು ನಾವೇ ಪರಿಶೋಧಿಸಿಕೊಂಡರೆ
ನ್ಯಾಯತೀರ್ಪಿಗೆ ಒಳಗಾಗುವುದಿಲ್ಲ. 32ಆದರೆ ಪ್ರಭುವು ನಮಗೆ
ತೀರ್ಪು ಮಾಡುವಾಗ, ನಮಗೆ ಸರಿಯಾದ ಮಾರ್ಗವನ್ನು
ತೋರಿಸುವುದಕ್ಕಾಗಿಯೂ ಈ ಲೋಕದ ಇತರ ಜನರೊಂದಿಗೆ
ನಮಗೆ ಅಪರಾಧಿಗಳೆಂಬ ತೀರ್ಪಾಗದಂತೆಯೂ ಆತನು
ನಮ್ಮನ್ನು ಶಿಕ್ಷಿಸುತ್ತಾನೆ. 33ಆದ್ದರಿಂದ ನನ್ನ ಪ್ರಿಯ ಸಹೋದರ
ಸಹೋದರಿಯರೇ, ನೀವು ಊಟ ಮಾಡುವುದಕ್ಕಾಗಿ ಒಟ್ಟಾಗಿ
ಸೇರುವಾಗ ಒಬ್ಬರಿಗೊಬ್ಬರು ಕಾದುಕೊಂಡಿರಿ. 34ಒಬ್ಬ
ವ್ಯಕ್ತಿಯು ಬಹು ಹಸಿವೆಗೊಂಡಿದ್ದರೆ, ಅವನು ಮನೆಯಲ್ಲಿ ಊಟ
ಮಾಡಲಿ. ನೀವು ಹೀಗೆ ಮಾಡಿದರೆ, ನಿಮ್ಮ ಸಭಾಕೂಟವು ನಿಮ್ಮ
ಮೇಲೆ ನ್ಯಾಯತೀರ್ಪನ್ನು ಬರಮಾಡುವುದಿಲ್ಲ. ಉಳಿದ
ವಿಷಯಗಳ ಬಗ್ಗೆ ನೀವು ಏನು ಮಾಡಬೇಕೆಂಬುದನ್ನು ನಾನು
ನಿಮ್ಮಲ್ಲಿಗೆ ಬಂದಾಗ ತಿಳಿಸಿಕೊಡುತ್ತೇನೆ.

## ಪವಿತ್ರಾತ್ಮನ ವರಗಳು

12 ಸಹೋದರ ಸಹೋದರಿಯರೇ, ಆತ್ಮಿಕ ವರಗಳ ಬಗ್ಗೆ
ನೀವು ಅರ್ಥಮಾಡಿಕೊಳ್ಳಬೇಕೆಂಬುದು ನನ್ನ ಅಪೇಕ್ಷೆ
ಯಾಗಿದೆ. 2ನೀವು ವಿಶ್ವಾಸಿಗಳಾಗುವುದಕ್ಕಿಂತ ಮುಂಚೆ ನಿಮ್ಮ
ಜೀವಿತವು ಹೇಗಿತ್ತೆಂಬುದನ್ನು ಜ್ಞಾಪಿಸಿಕೊಳ್ಳಿರಿ. ನಿಮಗಿಷ್ಟ
ಬಂದಂತೆ ನಿರ್ಜೀವ ವಸ್ತುಗಳಾದ ವಿಗ್ರಹಗಳನ್ನು ಆರಾಧಿಸು
ತ್ತಿದ್ದಿರಿ. 3ಹೀಗಿರಲಾಗಿ, ನಾನು ನಿಮಗೆ ಹೇಳುವುದೇನಂದರೆ,
ದೇವರಾತ್ಮನ ಸಹಾಯದಿಂದ ಮಾತಾಡುವ ಯಾವ ವ್ಯಕ್ತಿಯೇ
ಆಗಲಿ, ‘‘ಯೇಸು ಶಾಪಗ್ರಸ್ತನಾಗಲಿ’’ ಎಂದು ಹೇಳುವುದಿಲ್ಲ.
ಅಂತೆಯೇ ಪವಿತ್ರಾತ್ಮನ ಸಹಾಯವಿಲ್ಲದೆ ಯಾವ ವ್ಯಕ್ತಿಯೇ
ಆಗಲಿ, ‘‘ಯೇಸುವೇ ಪ್ರಭು’’ ಎಂದು ಹೇಳಲಾರನು.
4ಅನೇಕ ರೀತಿಯ ಆತ್ಮಿಕ ವರಗಳಿವೆ. ಆದರೆ ಅವುಗಳೆಲ್ಲ
ಒಬ್ಬನೇ ಆತ್ಮನಿಂದ ಬಂದಂಥವುಗಳಾಗಿವೆ. 5ಸೇವೆ ಮಾಡಲು

ವಿವಿಧ ಮಾರ್ಗಗಳಿವೆ. ಆದರೆ ಅವುಗಳೆಲ್ಲಾ ಒಬ್ಬನೇ ಆತ್ಮನಿಂದ
ಬಂದಂಥವುಗಳಾಗಿವೆ. 6ದೇವರು ಜನರಲ್ಲಿ ಮಾಡುವ
ಕಾರ್ಯಗಳಿಗೂ ವಿವಿಧ ಮಾರ್ಗಗಳಿವೆ. ಆದರೆ ಅವುಗಳೆಲ್ಲಾ
ಒಬ್ಬನೇ ದೇವರಿಂದ ಬಂದಂಥವುಗಳಾಗಿವೆ. 7ಪ್ರತಿಯೊಬ್ಬ
ವ್ಯಕ್ತಿಯಲ್ಲಿಯೂ ಪವಿತ್ರಾತ್ಮನ ವರವು ಕಾಣಬಲ್ಲದು. ಇತರರಿಗೆ
ಸಹಾಯ ಮಾಡಲೆಂದು ಪವಿತ್ರಾತ್ಮನು ವರವನ್ನು ಕೊಡುತ್ತಾನೆ.
8ಆತನು ಒಬ್ಬನಿಗೆ ಜ್ಞಾನದಿಂದ ಮಾತಾಡುವ ವರವನ್ನೂ
ಮತ್ತೊಬ್ಬನಿಗೆ ತಿಳುವಳಿಕೆಯಿಂದ ಮಾತಾಡುವ ವರವನ್ನೂ
ಕೊಡುತ್ತಾನೆ; 9ಒಬ್ಬನಿಗೆ ನಂಬಿಕೆಯನ್ನೂ ಮತ್ತೊಬ್ಬನಿಗೆ
ಸ್ವಸ್ಥಪಡಿಸುವ ವರವನ್ನೂ ಕೊಡುತ್ತಾನೆ; 10ಮತ್ತೊಬ್ಬನಿಗೆ
ಅದ್ಭುತಕಾರ್ಯಗಳನ್ನು ಮಾಡುವ ಶಕ್ತಿಯನ್ನೂ ಇನ್ನೊಬ್ಬನಿಗೆ
ಪ್ರವಾದಿಸುವ ಸಾಮರ್ಥ್ಯವನ್ನೂ ಇನ್ನೊಬ್ಬನಿಗೆ ಒಳ್ಳೆಯ ಮತ್ತು
ಕೆಟ್ಟ ಆತ್ಮಗಳ ನಡುವೆ ಇರುವ ವ್ಯತ್ಯಾಸವನ್ನು ತಿಳಿದುಕೊಳ್ಳುವ
ಸಾಮರ್ಥ್ಯವನ್ನೂ ಕೊಡುತ್ತಾನೆ; ಒಬ್ಬನಿಗೆ ಅನೇಕ ಭಾಷೆಗಳನ್ನು
ಮಾತಾಡುವ ಸಾಮರ್ಥ್ಯವನ್ನೂ ಮತ್ತೊಬ್ಬನಿಗೆ ಆ ಭಾಷೆಗಳನ್ನು
ಅನುವಾದಿಸುವ ಸಾಮರ್ಥ್ಯವನ್ನೂ ಕೊಡುತ್ತಾನೆ. 11ಪವಿತ್ರಾ
ತ್ಮನು ಒಬ್ಬನೇ. ಆತನೇ ಎಲ್ಲಾ ವರಗಳನ್ನು ತನ್ನ ಚಿತ್ತಕ್ಕನು
ಸಾರವಾಗಿ ಪ್ರತಿಯೊಬ್ಬನಿಗೂ ಹಂಚಿಕೊಟ್ಟು ನಡೆಸುತ್ತಾನೆ.

### ಕ್ರಿಸ್ತನ ದೇಹ

12ದೇಹವು ಒಂದೇ. ಆದರೆ ಅದು ಅನೇಕ ಅಂಗಗಳನ್ನು
ಪಡೆದಿದೆ. ಹೌದು, ದೇಹದಲ್ಲಿ ಅನೇಕ ಅಂಗಗಳಿವೆ, ಆದರೆ ಆ
ಎಲ್ಲಾ ಅಂಗಗಳಿಂದ ಒಂದೇ ಒಂದು ದೇಹವು ರೂಪಿತವಾಗು
ತ್ತದೆ. ಅಂತೆಯೇ ಕ್ರಿಸ್ತನು. 13ನಮ್ಮಲ್ಲಿ ಕೆಲವರು ಯೆಹೂದ್ಯ
ರಿದ್ದಾರೆ. ಕೆಲವರು ಗ್ರೀಕರಿದ್ದಾರೆ, ಕೆಲವರು ಗುಲಾಮರಿದ್ದಾರೆ,
ಕೆಲವರು ಸ್ವತಂತ್ರರಿದ್ದಾರೆ, ಆದರೆ ನಾವೆಲ್ಲರೂ ಒಂದೇ
ದೇಹವಾಗುವುದಕ್ಕಾಗಿ ಒಬ್ಬನೇ ಪವಿತ್ರಾತ್ಮನ ಮೂಲಕ
ದೀಕ್ಷಾಸ್ನಾನ ಮಾಡಿಸಿಕೊಂಡೆವು. ನಮ್ಮೆಲ್ಲರಿಗೂ ಒಬ್ಬನೇ
ಪವಿತ್ರಾತ್ಮನನ್ನು ಕೊಡಲಾಯಿತು. *

14ದೇಹವು ಒಂದು ಅಂಗಕ್ಕಿಂತಲೂ ಹೆಚ್ಚು ಅಂಗಗಳನ್ನು
ಪಡೆದಿದೆ. ಅದು ಅನೇಕ ಅಂಗಗಳನ್ನು ಪಡೆದಿದೆ. 15ಪಾದವು,
‘‘ನಾನು ಕೈಯಲ್ಲ; ಆದ್ದರಿಂದ ನಾನು ದೇಹಕ್ಕೆ ಸೇರಿಲ್ಲ’’ ಎಂದು
ಹೇಳಬಹುದು. ಆದರೆ ಹೀಗೆ ಹೇಳಿದ ಮಾತ್ರಕ್ಕೆ ಪಾದವು
ದೇಹದಿಂದ ಹೊರತಾಗಲಿಲ್ಲ. 16ಕಿವಿಯು, ‘‘ನಾನು ಕಣ್ಣಲ್ಲ;
ಆದ್ದರಿಂದ ನಾನು ದೇಹಕ್ಕೆ ಸೇರಿಲ್ಲ’’ ಎಂದು ಹೇಳಬಹುದು.
ಆದರೆ ಹೀಗೆ ಹೇಳಿದ ಮಾತ್ರಕ್ಕೆ ಕಿವಿಯು ದೇಹದಿಂದ ಹೊರ
ತಾಗಲಿಲ್ಲ.

17ಇಡೀ ದೇಹವೇ ಕಣ್ಣಾಗಿದ್ದರೆ, ಕೇಳಿಸಿಕೊಳ್ಳಲು ದೇಹಕ್ಕೆ
ಸಾಧ್ಯವಿರುತ್ತಿರಲಿಲ್ಲ. ಇಡೀ ದೇಹವೇ ಕಿವಿಯಾಗಿದ್ದರೆ. ದೇಹವು
ಯಾವುದರ ವಾಸನೆಯನ್ನೂ ತಿಳಿದುಕೊಳ್ಳಲಾಗುತ್ತಿರಲಿಲ್ಲ.
18-19ದೇಹದ ಪ್ರತಿಯೊಂದು ಅಂಗವು ಒಂದೇ ರೀತಿಯ
ಅಂಗವಾಗಿದ್ದರೆ, ಆಗ ದೇಹವೇ ಇರುತ್ತಿರಲಿಲ್ಲ. ಆದರೆ ದೇವರು
ತನ್ನ ಇಚ್ಛೆಗನುಸಾರವಾಗಿ ದೇಹದಲ್ಲಿ ಅಂಗಾಂಗಗಳನ್ನು
ಇಟ್ಟಿದ್ದಾನೆ. ಆತನು ಅವುಗಳಲ್ಲಿ ಪ್ರತಿಯೊಂದಕ್ಕೂ ಸ್ಥಳವನ್ನು
ಗೊತ್ತುಪಡಿಸಿದ್ದಾನೆ. 20ಆದ್ದರಿಂದ ಅಂಗಗಳು ಅನೇಕವಿದ್ದರೂ
ದೇಹವು ಒಂದೇ.

21ಕಣ್ಣು, ‘‘ನೀನು ನನಗೆ ಅವಶ್ಯವಿಲ್ಲ’’ ಎಂದು ಕೈಗೆ
ಹೇಳಲಾರದು ಮತ್ತು ತಲೆಯು, ‘‘ನೀನು ನನಗೆ ಅವಶ್ಯವಿಲ್ಲ’’
ಎಂದು ಪಾದಕ್ಕೆ ಹೇಳಲಾರದು. 22ಅಲ್ಲದೆ ದೇಹದಲ್ಲಿ
ಬಲಹೀನವಾಗಿ ತೋರುವ ಅಂಗಗಳು ನಿಜವಾಗಿಯೂ ಬಹಳ
ಅವಶ್ಯವಾಗಿವೆ. 23ನಾವು ದೇಹದ ಯಾವ ಅಂಗಗಳನ್ನು ಅಲ್ಪ
ವಾದುವುಗಳೆಂದು ಎಣಿಸುತ್ತೇವೊ ಆ ಅಂಗಗಳ ಬಗ್ಗೆ ಹೆಚ್ಚು
ಎಚ್ಚರಿಕೆ ತೆಗೆದುಕೊಳ್ಳುತ್ತೇವೆ. ನಾವು ನಮ್ಮ ಯಾವ ಅಂಗಗಳನ್ನು
ತೋರಿಸಬಯಸುವುದಿಲ್ಲವೊ ಆ ಅಂಗಗಳನ್ನು ವಿಶೇಷವಾದ
ರೀತಿಯಲ್ಲಿ ಸಂರಕ್ಷಿಸುತ್ತೇವೆ. 24ಬಹು ಸುಂದರವಾದ ಅಂಗ
ಗಳಿಗೆ ಇಂಥ ವಿಶೇಷ ಸಂರಕ್ಷಣೆಯ ಅಗತ್ಯವಿರುವುದಿಲ್ಲ. ಆದರೆ
ದೇವರು ಅಂಗಗಳನ್ನು ಒಟ್ಟಾಗಿ ಸೇರಿಸಿದ್ದಾನೆ. ಮತ್ತು
ಕೊರತೆಯಲ್ಲಿರುವ ಅಂಗಗಳಿಗೆ ಹೆಚ್ಚಿನ ಮಾನ್ಯತೆಯನ್ನು
ಕೊಟ್ಟಿದ್ದಾನೆ. 25ನಮ್ಮ ದೇಹವು ವಿಭಜನೆಯಾಗದಂತೆ ಅಂಗ
ಗಳು ಒಂದಕ್ಕೊಂದರ ಹಿತವನ್ನು ಸರಿಸಮನಾಗಿ ಗಮನಿಸುವಂತೆ
ದೇವರು ಮಾಡಿದ್ದಾನೆ. 26ಒಂದು ಅಂಗಕ್ಕೆ ನೋವಾದರೆ,
ಉಳಿದೆಲ್ಲ ಅಂಗಗಳು ಅದರೊಂದಿಗೆ ನೋವನ್ನು ಅನುಭವಿಸು
ತ್ತವೆ. ಒಂದು ಅಂಗಕ್ಕೆ ಸನ್ಮಾನ ದೊರೆತರೆ, ಉಳಿದೆಲ್ಲ ಅಂಗಗಳು
ಅದರ ಸನ್ಮಾನದಲ್ಲಿ ಪಾಲುಗಾರರಾಗುತ್ತವೆ.

27ನೀವೆಲ್ಲರೂ ಒಂದುಗೂಡಿ ಕ್ರಿಸ್ತನ ದೇಹವಾಗಿದ್ದೀರಿ.
ನಿಮ್ಮಲ್ಲಿ ಪ್ರತಿಯೊಬ್ಬರೂ ಅದರ ಅಂಗವಾಗಿದ್ದೀರಿ. 28ದೇವರು
ಸಭೆಯಲ್ಲಿ ಅಪೊಸ್ತಲರಿಗೆ ಮೊದಲನೆಯ ಸ್ಥಾನವನ್ನೂ ಪ್ರವಾದಿ
ಗಳಿಗೆ ಎರಡನೆಯ ಸ್ಥಾನವನ್ನೂ ಉಪದೇಶಕರಿಗೆ ಮೂರನೆಯ
ಸ್ಥಾನವನ್ನೂ ಇಟ್ಟಿದ್ದಾನೆ. ಇದಲ್ಲದೆ ದೇವರು, ಅದ್ಭುತ ಕಾರ್ಯ
ಗಳನ್ನು ಮಾಡುವ ಜನರಿಗೂ ಸ್ವಸ್ಥಪಡಿಸುವ ಜನರಿಗೂ
ಇತರರಿಗೆ ಸಹಾಯಮಾಡುವ ಜನರಿಗೂ ಮುನ್ನಡೆಸಬಲ್ಲ ಜನ
ರಿಗೂ ವಿವಿಧ ಭಾಷೆಗಳನ್ನು ಮಾತಾಡಬಲ್ಲ ಜನರಿಗೂ ಸಭೆ
ಯಲ್ಲಿ ಸ್ಥಾನವನ್ನು ಕೊಟ್ಟಿದ್ದಾನೆ. 29ಎಲ್ಲಾ ಜನರು ಅಪೊಸ್ತಲರು
ಗಳಲ್ಲ. ಎಲ್ಲಾ ಜನರು ಪ್ರವಾದಿಗಳಲ್ಲ. ಎಲ್ಲಾ ಜನರು
ಉಪಾಧ್ಯಾಯರುಗಳಲ್ಲ. ಎಲ್ಲಾ ಜನರು ಅದ್ಭುತ ಕಾರ್ಯ
ಗಳನ್ನು ಮಾಡುವುದಿಲ್ಲ. 30ಎಲ್ಲಾ ಜನರು ಗುಣಪಡಿಸುವ ವರ
ವನ್ನು ಹೊಂದಿಲ್ಲ. ಎಲ್ಲಾ ಜನರು ವಿವಿಧ ಭಾಷೆಗಳನ್ನು ಮಾತಾ
ಡುವುದಿಲ್ಲ. ಎಲ್ಲಾ ಜನರು ಆ ಭಾಷೆಗಳನ್ನು ಅನುವಾದಿಸು
ವುದಿಲ್ಲ. 31ಆದರೆ ನೀವು ಪವಿತ್ರಾತ್ಮನ ಇನ್ನೂ ಶ್ರೇಷ್ಠವಾದ
ವರಗಳನ್ನು ಯಥಾರ್ಥವಾಗಿ ಅಪೇಕ್ಷಿಸತಕ್ಕದ್ದು.

### ಪ್ರೀತಿ

ಈಗ ನಾನು ನಿಮಗೆ ಎಲ್ಲಕ್ಕಿಂತಲೂ ಉತ್ತಮವಾದ
ಮಾರ್ಗವನ್ನು ತೋರಿಸುತ್ತೇನೆ.

13 ನಾನು ಮನುಷ್ಯರ ಭಾಷೆಗಳನ್ನಲ್ಲದೆ ದೇವದೂತರ
ಭಾಷೆಗಳನ್ನು ಮಾತಾಡಬಹುದು. ಆದರೆ ನನ್ನಲ್ಲಿ
ಪ್ರೀತಿಯಿಲ್ಲದಿದ್ದರೆ, ನಾನು ಕೇವಲ ಗಣಗಣಿಸುವ ಘಂಟೆ.
ಝುಣಝುಣಿಸುವ ತಾಳ. 2ಪ್ರವಾದಿಸುವ ವರ ನನಗಿರಬಹುದು;
ದೇವರ ರಹಸ್ಯ ಸಂಗತಿಗಳನ್ನೆಲ್ಲಾ ಮತ್ತು ಜ್ಞಾನವನ್ನೆಲ್ಲಾ ನಾನು
ಅರ್ಥಮಾಡಿಕೊಂಡಿರಬಹುದು ಮತ್ತು ಬೆಟ್ಟಗಳನ್ನು ಚಲಿಸ
ಬಲ್ಲಂಥ ಮಹಾನಂಬಿಕೆ ನನಗಿರಬಹುದು. ಇವುಗಳೆಲ್ಲಾ ನನ್ನಲ್ಲಿ
ಇದ್ದರೂ ಪ್ರೀತಿಯು ಇಲ್ಲದಿದ್ದರೆ, ನಾನು ನಿಷ್ಪ್ರಯೋಜಕನಾಗಿ
ದ್ದೇನೆ. 3ನಾನು ನನ್ನಲ್ಲಿರುವ ಪ್ರತಿಯೊಂದನ್ನು ಜನರ ಊಟ

---

**ಕೊಡಲಾಯಿತು** ಅಕ್ಷರಶಃ ‘‘ಪಾನಕ್ಕಾಗಿ ಕೊಡಲ್ಪಟ್ಟನು.’’

ಕ್ಕಾಗಿ ಕೊಟ್ಟುಬಿಡಬಹುದು. ಹೆಮ್ಮೆಪಡುವುದಕ್ಕಾಗಿ ನಾನು ನನ್ನ
ದೇಹವನ್ನೇ ಸಜೀವದಹನವನ್ನಾಗಿ ಒಪ್ಪಿಸಿಕೊಡಬಹುದು.
ಆದರೆ ಈ ಕಾರ್ಯಗಳನ್ನೆಲ್ಲ ಮಾಡಿದರೂ ಪ್ರೀತಿಯು ನನ್ನಲ್ಲಿ
ಇಲ್ಲದಿದ್ದರೆ ನನಗೇನೂ ಪ್ರಯೋಜನವಿಲ್ಲ. 4ಪ್ರೀತಿಯು
ತಾಳ್ಮೆಯುಳ್ಳದ್ದು, ದಯೆಯುಳ್ಳದ್ದು. ಪ್ರೀತಿಯು ಅಸೂಯೆ
ಪಡುವುದಿಲ್ಲ; ಹೊಗಳಿಕೊಳ್ಳುವುದಿಲ್ಲ; ಗರ್ವಪಡುವುದಿಲ್ಲ.
5ಪ್ರೀತಿಯು ನಾಚಿಕೆಕರವಾದ ರೀತಿಯಲ್ಲಿ ವರ್ತಿಸುವುದಿಲ್ಲ;
ಸ್ವಾರ್ಥಿಯಲ್ಲ ಮತ್ತು ಬೇಗನೆ ಕೋಪಗೊಳ್ಳುವುದಿಲ್ಲ; ತನಗಾದ
ಅಪಕಾರಗಳನ್ನು ಜ್ಞಾಪಿಸಿಕೊಳ್ಳುವುದಿಲ್ಲ. 6ಪ್ರೀತಿಯು ಕೆಟ್ಟದ್ದರ
ಬಗ್ಗೆ ಸಂತೋಷಪಡದೆ ಸತ್ಯದ ಬಗ್ಗೆ ಸಂತೋಷಪಡುತ್ತದೆ.
7ಪ್ರೀತಿಯು ಎಲ್ಲವನ್ನು ತಾಳ್ಮೆಯಿಂದ ಸ್ವೀಕರಿಸಿಕೊಳ್ಳುತ್ತದೆ;
ಯಾವಾಗಲೂ ನಂಬುತ್ತದೆ; ಯಾವಾಗಲೂ ನಿರೀಕ್ಷಿಸುತ್ತದೆ;
ಯಾವಾಗಲೂ ದೃಢವಾಗಿರುತ್ತದೆ.

8ಪ್ರೀತಿಯು ಎಂದಿಗೂ ಕೊನೆಗೊಳ್ಳುವುದಿಲ್ಲ. ಪ್ರವಾದಿ
ಸುವ ವರಗಳಿವೆ, ಆದರೆ ಅವು ಕೊನೆಗೊಳ್ಳುತ್ತವೆ. ವಿವಿಧ ಭಾಷೆ
ಗಳಲ್ಲಿ ಮಾತಾಡುವ ವರಗಳಿವೆ, ಆದರೆ ಆ ವರಗಳು ಕೊನೆ
ಗೊಳ್ಳುತ್ತವೆ. ಜ್ಞಾನವೆಂಬ ವರವೂ ಇದೆ. ಆದರೆ ಅದೂ ಕೊನೆ
ಗೊಳ್ಳುವುದು. 9ಏಕೆಂದರೆ ನಮಗಿರುವ ಈ ಜ್ಞಾನವು ಮತ್ತು ಈ
ಪ್ರವಾದನೆಗಳು ಸಂಪೂರ್ಣವಾದುವುಗಳಲ್ಲ. 10ಆದರೆ ಸಂಪೂ
ರ್ಣತೆಯು ಬಂದಾಗ ಸಂಪೂರ್ಣವಲ್ಲದವುಗಳು ಕೊನೆಗೊಳ್ಳು
ತ್ತವೆ. 11ನಾನು ಬಾಲಕನಾಗಿದ್ದಾಗ ಬಾಲಕನಂತೆ ಮಾತಾ
ಡಿದೆನು, ಆಲೋಚಿಸಿದೆನು, ಯೋಜನೆಗಳನ್ನು ಮಾಡಿದೆನು.
ಆದರೆ ನಾನು ಪ್ರಾಯಸ್ಥನಾದ ಮೇಲೆ ಬಾಲ್ಯದ ನಡವಳಿಕೆ
ಯನ್ನು ಬಿಟ್ಟುಬಿಟ್ಟೆನು. 12ನಮಗೂ ಸಹ ಇದು ಅನ್ವಯಿಸುತ್ತದೆ.
ಕನ್ನಡಿಯಲ್ಲಿ ಕೇವಲ ಪ್ರತಿಬಿಂಬ ಕಾಣುವಂತೆ ಈಗ ನಾವು
ನೋಡುತ್ತಿದ್ದೇವೆ. ಆದರೆ ಮುಂದಿನ ಕಾಲದಲ್ಲಿ ನಾವು ಮುಖಾ
ಮುಖಿಯಾಗಿ ಕಾಣುತ್ತೇವೆ. ಈಗ ನನಗೆ ತಿಳಿದಿರುವುದು ಕೇವಲ
ಒಂದು ಭಾಗವಷ್ಟೆ, ಆದರೆ ಆ ಕಾಲದಲ್ಲಿ ದೇವರು ನನ್ನನ್ನು
ತಿಳಿದಿರುವಂತೆ ನಾನು ಸಂಪೂರ್ಣವಾಗಿ ತಿಳಿದುಕೊಳ್ಳುವೆನು.
13ಆದ್ದರಿಂದ ನಂಬಿಕೆ, ನಿರೀಕ್ಷೆ ಮತ್ತು ಪ್ರೀತಿ ಶಾಶ್ವತವಾದವು
ಗಳಾಗಿವೆ. ಆದರೆ ಇವುಗಳಲ್ಲಿ ಅತ್ಯುನ್ನತವಾದದ್ದು ಪ್ರೀತಿಯೇ.

### ಸಭೆಯ ಸಹಾಯಕ್ಕಾಗಿ ಆತ್ಮಿಕ ವರಗಳನ್ನು ಉಪಯೋಗಿಸಿರಿ

14 ಪ್ರೀತಿಯೇ ನಿಮ್ಮ ಗುರಿಯಾಗಿರಲಿ. ಅಲ್ಲದೆ ಪವಿ
ತ್ರಾತ್ಮನ ವರಗಳನ್ನು ಹೊಂದಿಕೊಳ್ಳಲು ವಿಶೇಷವಾಗಿ
ಪ್ರವಾದಿಸುವ ವರವನ್ನು ನೀವು ಬಹಳವಾಗಿ ಅಪೇಕ್ಷಿಸಬೇಕು.
2ಅದಕ್ಕೆ ಕಾರಣವೇನೆಂದರೆ: ಪರಭಾಷೆಯಲ್ಲಿ ಮಾತಾಡುವ
ವರವನ್ನು ಹೊಂದಿರುವವನು ಜನರೊಂದಿಗೆ ಮಾತಾಡು
ವುದಿಲ್ಲ. ಅವನು ದೇವರೊಂದಿಗೆ ಮಾತಾಡುತ್ತಾನೆ. ಯಾರೂ
ಅವನನ್ನು ಅರ್ಥಮಾಡಿಕೊಳ್ಳುವುದಿಲ್ಲ. ಏಕೆಂದರೆ ಅವನು
ಪವಿತ್ರಾತ್ಮನ ಮೂಲಕವಾಗಿ ರಹಸ್ಯ ಸಂಗತಿಗಳನ್ನು ಮಾತಾಡು
ತ್ತಿರುತ್ತಾನೆ. 3ಆದರೆ ಪ್ರವಾದಿಸುವವನು ಜನರೊಂದಿಗೆ
ಮಾತಾಡುತ್ತಾನೆ. ಅವನು ಜನರಿಗೆ ಶಕ್ತಿಯನ್ನು, ಪ್ರೋತ್ಸಾಹ
ವನ್ನು ಮತ್ತು ಆದರಣೆಯನ್ನು ಕೊಡುತ್ತಾನೆ. 4ಪರಭಾಷೆಯಲ್ಲಿ
ಮಾತಾಡುವ ವ್ಯಕ್ತಿಯು ತನಗೆ ಮಾತ್ರ ಸಹಾಯ ಮಾಡಿಕೊಳ್ಳು
ವನು. ಆದರೆ ಪ್ರವಾದಿಸುವವನು ಇಡೀ ಸಭೆಗೆ ಸಹಾಯ
ಮಾಡುತ್ತಾನೆ. 5ವಿವಿಧ ಭಾಷೆಗಳಲ್ಲಿ ಮಾತಾಡುವ ವರವನ್ನು
ನೀವೆಲ್ಲರೂ ಹೊಂದಿರಬೇಕೆಂದು ನನ್ನ ಅಪೇಕ್ಷೆಯಾಗಿದೆ.
ಆದರೆ ನೀವು ಪ್ರವಾದಿಸಬೇಕೆಂದು ನಾನು ಇನ್ನೂ ಹೆಚ್ಚಾಗಿ
ಅಪೇಕ್ಷಿಸುತ್ತೇನೆ. ಕೇವಲ ವಿವಿಧ ಭಾಷೆಗಳನ್ನು ಮಾತನಾಡು
ವವನಿಗಿಂತಲೂ ಪ್ರವಾದಿಸುವವನು ಹೆಚ್ಚು ಶ್ರೇಷ್ಠನಾಗಿದ್ದಾನೆ.
ಆದರೆ ವಿವಿಧ ಭಾಷೆಗಳಲ್ಲಿ ಮಾತಾಡುವವನು ಆ ಭಾಷೆಗಳನ್ನು
ಅನುವಾದಿಸಬಲ್ಲವನಾಗಿದ್ದರೆ, ಅವನು ಪ್ರವಾದಿಸುವವನಷ್ಟೇ
ಶ್ರೇಷ್ಠನಾಗುತ್ತಾನೆ. ಆಗ ಅವನು ಹೇಳುವ ಸಂಗತಿಗಳ ಮೂಲಕ
ಸಭೆಗೆ ಸಹಾಯವಾಗುವುದು.

6ಸಹೋದರ ಸಹೋದರಿಯರೇ, ನಾನು ವಿವಿಧ ಭಾಷೆ
ಗಳನ್ನು ಮಾತಾಡುವವನಾಗಿ ನಿಮ್ಮ ಬಳಿಗೆ ಬಂದರೆ ಅದರಿಂದ
ನಿಮಗೆ ಸಹಾಯವಾಗುವುದೇ? ಇಲ್ಲ! ನಾನು ನಿಮಗೆ ಹೊಸ
ಸತ್ಯವನ್ನು, ಜ್ಞಾನವನ್ನು, ಪ್ರವಾದನೆಯನ್ನು ಮತ್ತು ಉಪ
ದೇಶವನ್ನು ತಂದರೆ ಮಾತ್ರ ನಿಮಗೆ ಸಹಾಯವಾಗುತ್ತದೆ.
7ನಾದವನ್ನು ಹೊರ ಹೊಮ್ಮಿಸುವ ಕೊಳಲು ಅಥವಾ ವೀಣೆ
ಮುಂತಾದ ನಿರ್ಜೀವ ವಸ್ತುಗಳಿಗೆ ಇದು ಸರಿಹೋಲುತ್ತದೆ.
ವಿವಿಧ ಧ್ವನಿಗಳು ಸ್ಪಷ್ಟವಾಗಿಲ್ಲದಿದ್ದರೆ ಯಾವ ಹಾಡನ್ನು
ನುಡಿಸಲಾಗುತ್ತಿದೆ ಎಂಬುದನ್ನು ನೀವು ಅರ್ಥಮಾಡಿಕೊಳ್ಳ
ಲಾರಿರಿ. ಪ್ರತಿಯೊಂದು ಧ್ವನಿಯನ್ನು ಸ್ಪಷ್ಟವಾಗಿ ನುಡಿಸಿದಾಗ
ಮಾತ್ರ ನೀವು ಸ್ವರವನ್ನು ಅರ್ಥಮಾಡಿಕೊಳ್ಳುವಿರಿ. 8ಇದಲ್ಲದೆ
ಯುದ್ಧದಲ್ಲಿ ಕಹಳೆಯನ್ನು ಸ್ಪಷ್ಟವಾಗಿ ಊದದಿದ್ದರೆ, ಇದು
ಯುದ್ಧಕ್ಕೆ ಸಿದ್ಧರಾಗುವ ಸಮಯವೆಂಬುದು ಸೈನಿಕರಿಗೆ ತಿಳಿಯು
ವುದಿಲ್ಲ. 9ಇದು ನಿಮಗೂ ಅನ್ವಯಿಸುತ್ತದೆ. ನೀವು ನಿಮ್ಮ
ನಾಲಿಗೆಯಿಂದ ಮಾತಾಡುವ ಪದಗಳು ಸ್ಪಷ್ಟವಾಗಿರಬೇಕು.
ನೀವು ಸ್ಪಷ್ಟವಾಗಿ ಮಾತಾಡದಿದ್ದರೆ, ನೀವು ಏನು ಮಾತಾಡು
ತ್ತಿದ್ದೀರೆಂಬುದನ್ನು ಜನರು ಅರ್ಥಮಾಡಿಕೊಳ್ಳುವುದಿಲ್ಲ. ನೀವು
ಗಾಳಿಯೊಂದಿಗೆ ಮಾತಾಡುತ್ತಿರುವಂತೆ ತೋರುವುದು.
10ಪ್ರಪಂಚದಲ್ಲಿ ಹಲವಾರು ಭಾಷೆಗಳಿರುವುದೇನೋ ಸತ್ಯ
ಮತ್ತು ಆ ಭಾಷೆಗಳಿಗೆಲ್ಲಾ ಅರ್ಥವಿದೆ. 11ಆದ್ದರಿಂದ, ಒಬ್ಬ
ವ್ಯಕ್ತಿಯು ಮಾತಾಡುವ ಭಾಷೆಯನ್ನು ನಾನು ಅರ್ಥಮಾಡಿ
ಕೊಳ್ಳದಿದ್ದರೆ ಅವನು ನನಗೆ ವಿದೇಶಿಯನಂತಿರುವನು; ನಾನೂ
ಅವನಿಗೆ ವಿದೇಶಿಯನಂತಿರುವೆನು. 12ಇದು ನಿಮಗೂ ಅನ್ವಯಿ
ಸುತ್ತದೆ. ನೀವು ಆತ್ಮಿಕ ವರಗಳನ್ನು ಬಹಳವಾಗಿ ಅಪೇಕ್ಷಿಸುತ್ತೀರಿ.
ಆದ್ದರಿಂದ, ಸಭೆಯು ದೃಢವಾಗಿ ಬೆಳೆಯಲು ಸಹಾಯಕರವಾದ
ವರಗಳನ್ನು ಹೊಂದಿಕೊಳ್ಳಲು ಹೆಚ್ಚಾಗಿ ಪ್ರಯತ್ನಿಸಿರಿ.

13ಪರಭಾಷೆಯಲ್ಲಿ ಮಾತಾಡುವ ವರವುಳ್ಳವನು ತಾನು
ಹೇಳುವ ವಿಷಯಗಳನ್ನು ಅನುವಾದಿಸುವ ಸಾಮರ್ಥ್ಯ
ಕ್ಕಾಗಿಯೂ ದೇವರಲ್ಲಿ ಪ್ರಾರ್ಥಿಸಲಿ. 14ನಾನು ಪರಭಾಷೆಯಲ್ಲಿ
ಪ್ರಾರ್ಥಿಸಿದರೆ, ನನ್ನ ಆತ್ಮವು ಪ್ರಾರ್ಥಿಸುವುದೇ ಹೊರತು ನನ್ನ
ಮನಸ್ಸು ತಟಸ್ಥವಾಗಿರುವುದು. 15ಆದ್ದರಿಂದ ನಾನೇನು ಮಾಡ
ಬೇಕು? ನಾನು ನನ್ನ ಆತ್ಮದಿಂದಲೂ ಮನಸ್ಸಿನಿಂದಲೂ
ಪ್ರಾರ್ಥಿಸುವೆನು; ನನ್ನ ಜೀವಾತ್ಮದೊಂದಿಗೂ ಮನಸ್ಸಿ
ನೊಂದಿಗೂ ಹಾಡುವೆನು. 16ನೀನು ನಿನ್ನ ಜೀವಾತ್ಮದಿಂದ ಸ್ತುತಿಸ
ಬಹುದು. ಆದರೆ ಅಲ್ಲಿರುವ ಒಬ್ಬನು ನಿನ್ನ ಕೃತಜ್ಞತಾಸ್ತುತಿಯನ್ನು
ಅರ್ಥಮಾಡಿಕೊಳ್ಳದ ಹೊರತು ‘‘ಆಮೆನ್’’ ಎಂದು ಹೇಳ
ಲಾರನು. ಏಕೆಂದರೆ ನೀನು ಹೇಳುತ್ತಿರುವುದು ಅವನಿಗೆ ತಿಳಿಯು
ವುದಿಲ್ಲ. 17ಸತ್ಯವಾಗಿ ಹೇಳುವುದಾದರೆ, ದೇವರಿಗೆ ಮಾಡುವ
ಕೃತಜ್ಞತಾಸ್ತುತಿಯಿಂದ ಬೇರೊಬ್ಬನಿಗೆ ಸಹಾಯವಾಗುವುದಿಲ್ಲ.

18ವಿವಿಧ ಭಾಷೆಗಳಲ್ಲಿ ಮಾತಾಡಲು ನಿಮ್ಮೆಲ್ಲರಿಗಿಂತಲೂ
ಹೆಚ್ಚಿನ ವರವು ನನಗಿದೆ. 19ಆದರೆ ಸಭಾಕೂಟಗಳಲ್ಲಿ ಅರ್ಥ
ವಾಗದಂಥ ಪರಭಾಷೆಯಲ್ಲಿ ಸಾವಿರಾರು ಮಾತುಗಳನ್ನು ಹೇಳು
ವುದಕ್ಕಿಂತ ಅರ್ಥವಾಗುವಂಥ ಕೆಲವೇ ಮಾತುಗಳನ್ನು ಹೇಳಲು
ಇಷ್ಟಪಡುತ್ತೇನೆ. ಇತರರಿಗೆ ಉಪದೇಶ ಮಾಡುವುದಕ್ಕಾಗಿ
ನಾನು ತಿಳುವಳಿಕೆಯಿಂದ ಮಾತಾಡುವೆನು.

20ಸಹೋದರ ಸಹೋದರಿಯರೇ, ಮಕ್ಕಳಂತೆ ಆಲೋಚಿಸ
ಬೇಡಿ. ಕೆಟ್ಟ ವಿಷಯಗಳಲ್ಲಿ ಎಳೆಗೂಸುಗಳಂತಿರಿ. ಆದರೆ ನಿಮ್ಮ
ಆಲೋಚನೆಗಳಲ್ಲಿ ಪ್ರಾಯಸ್ಥರಂತಿರಿ. 21ಪವಿತ್ರ ಗ್ರಂಥದಲ್ಲಿ ಈ
ರೀತಿ ಬರೆಯಲ್ಪಟ್ಟಿದೆ:

> ‘‘ವಿವಿಧ ಭಾಷೆಗಳನ್ನು ಮಾತಾಡುವವರ ಮೂಲಕವೂ ವಿದೇಶಿಯರ ನಾಲಿಗೆಯ ಮೂಲಕವೂ ನಾನು ಈ ಜನರೊಂದಿಗೆ ಮಾತಾಡುವೆನು; ಆದರೂ ಇವರು ನನಗೆ ವಿಧೇಯರಾಗುವುದಿಲ್ಲ.’’
>
> *ಯೆಶಾಯ 28:11-12*

ಪ್ರಭುವು ಹೇಳುವುದು ಅದನ್ನೇ.

22ಆದ್ದರಿಂದ ವಿವಿಧ ಭಾಷೆಗಳನ್ನು ಮಾತಾಡುವ ವರವು
ನಂಬದ ಜನರಿಗೆ ಆಧಾರವಾಗಿದೆಯೇ ಹೊರತು ನಂಬು
ವವರಿಗಲ್ಲ. ಆದರೆ ಪ್ರವಾದನೆಯು ನಂಬುವ ಜನರಿಗೋಸ್ಕರ
ವಾಗಿ ಇದೆಯೇ ಹೊರತು ನಂಬದವರಿಗಲ್ಲ. 23ಒಂದುವೇಳೆ
ಇಡೀ ಸಭೆಯು ಕೂಡಿಬಂದಾಗ ನೀವೆಲ್ಲರೂ ವಿವಿಧ ಭಾಷೆ
ಗಳನ್ನು ಮಾತಾಡತೊಡಗಿದರೆ, ಅಲ್ಲಿಗೆ ಬರುವ ತಿಳುವಳಿಕೆ
ಯಿಲ್ಲದ ಅಥವಾ ನಂಬದ ಕೆಲವು ಜನರು ನಿಮ್ಮನ್ನು ಹುಚ್ಚ
ರೆಂದು ಹೇಳುವರು. 24ಒಂದು ವೇಳೆ ನೀವೆಲ್ಲರೂ ಪ್ರವಾದನೆ
ಮಾಡುತ್ತಿರುವಾಗ, ತಿಳುವಳಿಕೆಯಿಲ್ಲದ ಅಥವಾ ನಂಬಿಕೆ
ಯಿಲ್ಲದ ವ್ಯಕ್ತಿಯು ಒಳಗೆ ಬಂದರೆ, ನಿಮ್ಮ ಪ್ರವಾದನೆಗಳು ಆ
ವ್ಯಕ್ತಿಗೆ ಅವನ ಪಾಪವನ್ನು ತೋರಿಸಿಕೊಡುತ್ತವೆ ಮತ್ತು ನೀವು
ಹೇಳುವ ವಿಷಯಗಳ ಆಧಾರದ ಮೇಲೆ ಅವನಿಗೆ ತೀರ್ಪಾ
ಗುವುದು. 25ಆ ವ್ಯಕ್ತಿಯ ಹೃದಯದಲ್ಲಿರುವ ರಹಸ್ಯ ಸಂಗತಿಗಳು
ಬಯಲಾಗುತ್ತವೆ. ಆದ್ದರಿಂದ ಆ ವ್ಯಕ್ತಿಯು ಅಡ್ಡಬಿದ್ದು
ದೇವರನ್ನು ಆರಾಧಿಸುವನು. ‘‘ನಿಜವಾಗಿಯೂ ದೇವರು ನಿಮ್ಮ
ಸಂಗಡವಿದ್ದಾನೆ’’ ಎಂದು ಅವನು ಹೇಳುವನು.

### ನಿಮ್ಮ ಸಭಾಕೂಟಗಳು ಸಭೆಗೆ ಸಹಾಯಕವಾಗಿರಬೇಕು

26ಆದ್ದರಿಂದ ಸಹೋದರ ಸಹೋದರಿಯರೇ, ನೀವು
ಮಾಡತಕ್ಕದ್ದೇನು? ನೀವು ಸಭೆಸೇರಿದಾಗ, ಒಬ್ಬನು ಹಾಡು
ತ್ತಾನೆ; ಒಬ್ಬನು ಉಪದೇಶ ಮಾಡುತ್ತಾನೆ; ಒಬ್ಬನು ದೇವ ರಿಂದ
ಹೊಸ ಸತ್ಯವನ್ನು ತಿಳಿಸುತ್ತಾನೆ; ಒಬ್ಬನು ಪರಭಾಷೆಯಲ್ಲಿ
ಮಾತಾಡುತ್ತಾನೆ; ಒಬ್ಬನು ಆ ಪರಭಾಷೆಯನ್ನು ಅನುವಾದಿಸು
ತ್ತಾನೆ. ಸಭೆಯು ದೃಢವಾಗಿ ಬೆಳೆಯಬೇಕೆಂಬುದೇ ಇವುಗಳ
ಉದ್ದೇಶವಾಗಿರಬೇಕು. 27ನೀವು ಸಭೆಸೇರಿರುವಾಗ, ಯಾರಾ
ದರೂ ಪರಭಾಷೆಯಲ್ಲಿ ಮಾತಾಡಲು ಬಯಸಿದರೆ, ಇಬ್ಬರು
ಅಥವಾ ಮೂವರಿಗಿಂತಲೂ ಹೆಚ್ಚು ಜನರು ಪರಭಾಷೆಯಲ್ಲಿ
ಮಾತಾಡಬಾರದು. ಅವರು ಹೇಳುವುದನ್ನು ಮತ್ತೊಬ್ಬ
ವ್ಯಕ್ತಿಯು ಅನುವಾದಿಸಬೇಕು. 28ಆದರೆ ಅನುವಾದಕನು ಇಲ್ಲ
ದಿದ್ದರೆ, ಪರಭಾಷೆಯಲ್ಲಿ ಮಾತಾಡುವವನು ಸಭೆಯಲ್ಲಿ ಮೌನ
ವಾಗಿರಬೇಕು. ಆ ವ್ಯಕ್ತಿಯು ತನ್ನೊಂದಿಗೂ ದೇವರೊಂದಿಗೂ
ಮಾತ್ರ ಮಾತಾಡಬೇಕು.

29ಇಬ್ಬರು ಅಥವಾ ಮೂವರು ಪ್ರವಾದಿಗಳು ಮಾತ್ರ
ಮಾತಾಡಬೇಕು. ಅವರು ಹೇಳುವುದನ್ನು ಇತರರು ವಿವೇಚಿಸ
ಬೇಕು. 30ಸಭೆಯಲ್ಲಿ ಕುಳಿತಿರುವ ಮತ್ತೊಬ್ಬ ವ್ಯಕ್ತಿಗೆ ದೇವರ
ಸಂದೇಶವು ದೊರೆತರೆ, ಮೊದಲು ಮಾತಾಡುತ್ತಿರುವವನು ತನ್ನ
ಮಾತನ್ನು ನಿಲ್ಲಿಸಲಿ. 31ನೀವೆಲ್ಲರೂ ಒಬ್ಬರಾದ ನಂತರ ಒಬ್ಬರು
ಪ್ರವಾದಿಸಬಹುದು. ಈ ರೀತಿಯಲ್ಲಿ ಎಲ್ಲಾ ಜನರು ಕಲಿತು
ಕೊಳ್ಳುವರು ಮತ್ತು ಪ್ರೋತ್ಸಾಹಿತರಾಗುವರು. 32ಪ್ರವಾದಿಗಳ
ಜೀವಾತ್ಮಗಳು ಪ್ರವಾದಿಗಳ ಸ್ವಾಧೀನದಲ್ಲಿಯೇ ಇರುತ್ತವೆ.
33ದೇವರು ಸಮಾಧಾನಕ್ಕೆ ಕಾರಣನೇ ಹೊರತು ಗಲಿಬಿಲಿಗೆ
ಕಾರಣನಲ್ಲ.

34ಸ್ತ್ರೀಯರು ಸಭಾಕೂಟಗಳಲ್ಲಿ ಮೌನವಾಗಿರಬೇಕು.
ದೇವಮಕ್ಕಳ ಎಲ್ಲಾ ಸಭೆಗಳಲ್ಲಿಯೂ ಇದೇ ಪದ್ಧತಿ ರೂಢಿ
ಯಲ್ಲಿದೆ. ಸ್ತ್ರೀಯರಿಗೆ ಮಾತಾಡಲು ಅನುಮತಿಯಿಲ್ಲ. ಅವರು
ಅಧೀನರಾಗಿರಬೇಕು. ಮೋಶೆಯ ಧರ್ಮಶಾಸ್ತ್ರವು ಸಹ
ಇದನ್ನೇ ಹೇಳುತ್ತದೆ. 35ಸ್ತ್ರೀಯರು ಏನಾದರೂ ತಿಳಿದುಕೊಳ್ಳ
ಬೇಕೆಂದಿದ್ದರೆ, ತಮ್ಮ ಮನೆಗಳಲ್ಲಿ ತಮ್ಮ ಗಂಡಂದಿರನ್ನು ಕೇಳ
ಬೇಕು. ಬಹಿರಂಗಕೂಟದಲ್ಲಿ ಸ್ತ್ರೀಯರು ಮಾತಾಡುವಂಥದ್ದು
ನಾಚಿಕೆಕರವಾದದ್ದು. 36ದೇವರ ಉಪದೇಶವು ನಿಮ್ಮಿಂದ
ಬರುತ್ತದೆಯೇ? ಇಲ್ಲ! ಆ ಉಪದೇಶವನ್ನು ಹೊಂದಿ
ಕೊಂಡವರು ನೀವು ಮಾತ್ರವೋ? ಇಲ್ಲ!

37ಯಾವನಾದರೂ ತಾನು ಪ್ರವಾದಿಯೆಂದು ಅಥವಾ
ತನ್ನಲ್ಲಿ ಆತ್ಮಿಕವರವಿದೆಯೆಂದು ಯೋಚಿಸುವುದಾದರೆ, ಇದು
ಪ್ರಭುವಿನ ಆಜ್ಞೆಯೆಂದು ಅವನು ಅರ್ಥಮಾಡಿಕೊಳ್ಳಬೇಕು.
38ಯಾವನಾದರೂ ಇದನ್ನು ಒಪ್ಪಿಕೊಳ್ಳದಿದ್ದರೆ, ನೀವೂ
ಅವನನ್ನು ಒಪ್ಪಿಕೊಳ್ಳಬಾರದು.

39ಆದ್ದರಿಂದ ಸಹೋದರ ಸಹೋದರಿಯರೇ, ನೀವು
ಪ್ರವಾದನಾವರವನ್ನು ನಿಜವಾಗಿಯೂ ಬಯಸಿರಿ. ವಿವಿಧ
ಭಾಷೆಗಳಲ್ಲಿ ಮಾತಾಡುವ ವರವನ್ನು ಹೊಂದಿರುವವರು ತಮ್ಮ
ವರವನ್ನು ಉಪಯೋಗಿಸಲಿ. ಅವರನ್ನು ತಡೆಯಬೇಡಿರಿ.
40ಆದರೆ ಪ್ರತಿಯೊಂದನ್ನೂ ಸರಿಯಾದ ರೀತಿಯಲ್ಲಿ ಮತ್ತು
ಕ್ರಮಬದ್ಧವಾಗಿ ಮಾಡಿರಿ.

### ಕ್ರಿಸ್ತನ ವಿಷಯವಾದ ಸುವಾರ್ತೆ

15 ಸಹೋದರ ಸಹೋದರಿಯರೇ, ನಾನು ನಿಮಗೆ
ತಿಳಿಸಿದ ಸುವಾರ್ತೆಯನ್ನು ನೀವು ಜ್ಞಾಪಿಸಿಕೊಳ್ಳಿರಿ.
ನೀವು ಅದನ್ನು ಸ್ವೀಕರಿಸಿಕೊಂಡಿರಿ ಮತ್ತು ಅದರಲ್ಲಿ
ದೃಢವಾಗಿದ್ದೀರಿ. 2ನೀವು ಆ ಸಂದೇಶದ ಮೂಲಕ ರಕ್ಷಣೆ
ಹೊಂದಿದ್ದೀರಿ. ನಾನು ನಿಮಗೆ ತಿಳಿಸಿದ ಸಂದೇಶದಲ್ಲಿ ನಿಮಗೆ
ದೃಢವಾದ ನಂಬಿಕೆ ಇರಲೇಬೇಕು. ನೀವು ಹೀಗೆ ಮಾಡದಿದ್ದರೆ,
ನಿಮ್ಮ ನಂಬಿಕೆಯು ನಿರರ್ಥಕವಾಗುವುದು.

3ನಾನು ಸ್ವೀಕರಿಸಿಕೊಂಡ ಸಂದೇಶವನ್ನು ನಾನು ನಿಮಗೆ
ತಿಳಿಸಿದೆನು. ಆ ಸಂಗತಿಗಳು ಬಹಳ ಮುಖ್ಯವಾದುವುಗಳಾಗಿವೆ.
ಪವಿತ್ರ ಗ್ರಂಥವು ಹೇಳುವಂತೆ, ಕ್ರಿಸ್ತನು ನಮ್ಮ ಪಾಪಗಳಿ

ಗೋಸ್ಕರವಾಗಿ ಸತ್ತು 4ಹೂಳಲ್ಪಟ್ಟು ಮೂರನೆಯ ದಿನದಲ್ಲಿ ಜೀವಂತವಾಗಿ ಎದ್ದುಬಂದನು. 5ಬಳಿಕ ಕ್ರಿಸ್ತನು ಪೇತ್ರನಿಗೆ ಕಾಣಿಸಿಕೊಂಡನು. ಅನಂತರ ಹನ್ನೆರಡು ಮಂದಿ ಅಪೊಸ್ತಲರಿಗೆ ಕಾಣಿಸಿಕೊಂಡನು.

6ತರುವಾಯ, ಒಂದೇ ಸಮಯದಲ್ಲಿ ಐನೂರಕ್ಕಿಂತಲೂ ಹೆಚ್ಚು ಮಂದಿ ಸಹೋದರರಿಗೆ ಕಾಣಿಸಿಕೊಂಡನು. ಈ ಸಹೋದರರಲ್ಲಿ ಬಹುಮಂದಿ ಇಂದಿನವರೆಗೂ ಬದುಕಿದ್ದಾರೆ. ಆದರೆ ಕೆಲವರು ಸತ್ತುಹೋದರು. 7ಬಳಿಕ ಕ್ರಿಸ್ತನು ಯಾಕೋಬನಿಗೆ ಕಾಣಿಸಿಕೊಂಡನು. ಅನಂತರ ಮತ್ತೊಮ್ಮೆ ಎಲ್ಲಾ ಅಪೊಸ್ತಲರಿಗೆ ಕಾಣಿಸಿಕೊಂಡನು. 8ಕಟ್ಟಕಡೆಗೆ, ಕ್ರಿಸ್ತನು, ದಿನ ತುಂಬುವ ಮೊದಲೇ ಹುಟ್ಟಿದಂತಿದ್ದ ನನಗೆ ಕಾಣಿಸಿಕೊಂಡನು. 9ಉಳಿದೆಲ್ಲಾ ಅಪೊಸ್ತಲರು ನನಗಿಂತಲೂ ಶ್ರೇಷ್ಠರಾಗಿದ್ದಾರೆ. ಇದಕ್ಕೆ ಕಾರಣವೇನಂದರೆ, ನಾನು ದೇವರ ಸಭೆಯನ್ನು ಹಿಂಸಿಸಿದೆನು. ಆದ್ದರಿಂದ ಅಪೊಸ್ತಲನೆಂದು ಕರೆಸಿಕೊಳ್ಳುವುದಕ್ಕೂ ನಾನು ಯೋಗ್ಯನಲ್ಲ. 10ಆದರೆ, ದೇವರ ಕೃಪೆಯಿಂದ ನಾನು ಅಪೊಸ್ತಲನಾಗಿದ್ದೇನೆ. ಆತನು ನನಗೆ ತೋರಿದ ಕೃಪೆಯು ನಿಷ್ಫಲವಾಗಲಿಲ್ಲ. ಉಳಿದೆಲ್ಲ ಅಪೊಸ್ತಲರಿಗಿಂತ ನಾನು ಹೆಚ್ಚು ಕಷ್ಟಪಟ್ಟು ಸೇವೆ ಮಾಡಿದ್ದೇನೆ. (ಆದರೆ ಸೇವೆ ಮಾಡುತ್ತಿದ್ದವನು ನಿಜವಾಗಿಯೂ ನಾನಲ್ಲ. ದೇವರ ಕೃಪೆಯೇ ನನ್ನೊಂದಿಗಿತ್ತು.) 11ಆದ್ದರಿಂದ ನಾನು ಬೋಧನೆ ಮಾಡಿದೆನೊ ಅಥವಾ ಇತರ ಅಪೊಸ್ತಲರು ಬೋಧನೆ ಮಾಡಿದರೊ ಎಂಬುದು ಮುಖ್ಯವಲ್ಲ. ನಾವೆಲ್ಲರೂ ಒಂದೇ ಸಂದೇಶವನ್ನು ಬೋಧಿಸುತ್ತೇವೆ ಮತ್ತು ನೀವು ನಂಬಿರುವುದೂ ಅದನ್ನೇ.

### ನಾವು ಪುನರುತ್ಥಾನ ಹೊಂದುವೆವು

12ಕ್ರಿಸ್ತನು ಸತ್ತವರೊಳಗಿಂದ ಜೀವಂತವಾಗಿ ಎದ್ದು ಬಂದನೆಂದು ನಾವು ಬೋಧಿಸಿದ್ದೇವೆ. ಹೀಗಿರಲಾಗಿ, ಜನರಿಗೆ ಪುನರುತ್ಥಾನವಿಲ್ಲವೆಂದು ನಿಮ್ಮಲ್ಲಿ ಕೆಲವರು ಹೇಳುತ್ತಿರುವುದೇಕೆ? 13ಜನರಿಗೆ ಪುನರುತ್ಥಾನವಿಲ್ಲದಿದ್ದರೆ ಕ್ರಿಸ್ತನು ಸಹ ಸತ್ತವರೊಳಗಿಂದ ಎದ್ದೇಬಂದಿಲ್ಲ. 14ಕ್ರಿಸ್ತನು ಎದ್ದೇಬಂದಿಲ್ಲವಾದರೆ ನಮ್ಮ ಬೋಧನೆಗೂ ನಿಮ್ಮ ನಂಬಿಕೆಗೂ ಯಾವ ಬೆಲೆಯೂ ಇಲ್ಲ. 15ಅಲ್ಲದೆ, ದೇವರ ಬಗ್ಗೆ ನಾವು ಸುಳ್ಳುಸಾಕ್ಷಿ ಹೇಳಿದಂತಾಗುವುದು. ಏಕೆಂದರೆ, ದೇವರು ಕ್ರಿಸ್ತನನ್ನು ಜೀವಂತವಾಗಿ ಎಬ್ಬಿಸಿದನೆಂದು ನಾವು ದೇವರ ಬಗ್ಗೆ ಬೋಧಿಸಿದೆವು. ಜನರು ಜೀವಂತವಾಗಿ ಎದ್ದುಬರದಿದ್ದರೆ, ದೇವರು ಕ್ರಿಸ್ತನನ್ನು ಜೀವಂತವಾಗಿ ಎಬ್ಬಿಸಲೇ ಇಲ್ಲ. 16ಸತ್ತುಹೋದ ಜನರು ಎಬ್ಬಿಸಲ್ಪಡದಿದ್ದರೆ, ಕ್ರಿಸ್ತನು ಸಹ ಎಬ್ಬಿಸಲ್ಪಡಲೇ ಇಲ್ಲ. 17ಕ್ರಿಸ್ತನು ಜೀವಂತವಾಗಿ ಎಬ್ಬಿಸಲ್ಪಟ್ಟಿಲ್ಲದಿದ್ದರೆ, ನಿಮ್ಮ ನಂಬಿಕೆಯು ನಿಷ್ಪ್ರಯೋಜಕವಾಗಿದೆ ಮತ್ತು ನೀವು ನಿಮ್ಮ ಪಾಪಗಳಿಂದ ಇನ್ನೂ ಅಪರಾಧಿಗಳಾಗಿದ್ದೀರಿ. 18ಇದಲ್ಲದೆ ಕ್ರಿಸ್ತನಲ್ಲಿದ್ದು ಸತ್ತುಹೋದವರು ನಾಶವಾಗಿದ್ದಾರೆ. 19ನಮಗೆ ಕ್ರಿಸ್ತನಲ್ಲಿರುವ ನಿರೀಕ್ಷೆಯು ಈ ಲೋಕಕ್ಕೆ ಮಾತ್ರ ಸೀಮಿತವಾಗಿದ್ದರೆ, ನಾವು ಬೇರೆಲ್ಲ ಜನರಿಗಿಂತಲೂ ದುಃಖಕ್ಕೆ ಪಾತ್ರರಾಗಿದ್ದೇವೆ.

20ಆದರೆ ಕ್ರಿಸ್ತನು ನಿಜವಾಗಿಯೂ ಸತ್ತವರೊಳಗಿಂದ ಜೀವಂತವಾಗಿ ಎದ್ದುಬಂದಿದ್ದಾನೆ. ನಿದ್ರೆಹೋದವರಲ್ಲಿ ಅಂದರೆ ಸತ್ತುಹೋದ ಎಲ್ಲಾ ವಿಶ್ವಾಸಿಗಳಲ್ಲಿ ಆತನೇ ಪ್ರಥಮ ಫಲವಾದನು. 21ಒಬ್ಬ ಮನುಷ್ಯನು (ಆದಾಮನು) ಮಾಡಿದ ಕಾರ್ಯದಿಂದಾಗಿ ಜನರು ಮರಣ ಹೊಂದುವಂತೆಯೇ ಒಬ್ಬ ಮನುಷ್ಯನ (ಕ್ರಿಸ್ತನ) ಮೂಲಕವಾಗಿಯೇ ಜನರು ಜೀವಂತವಾಗಿ ಎದ್ದು ಬರುವರು. 22ಆದಾಮನ ಸಂಬಂಧದಿಂದ ಎಲ್ಲರೂ ಸಾಯುತ್ತಾರೆ. ಇದೇ ರೀತಿ ಕ್ರಿಸ್ತನ ಸಂಬಂಧದಿಂದ ನಾವೆಲ್ಲರು ಮತ್ತೆ ಜೀವಂತರಾಗುತ್ತೇವೆ. 23ಆದರೆ ಪ್ರತಿಯೊಬ್ಬನು ಕ್ರಮಬದ್ಧ ರೀತಿಯಲ್ಲಿ ಜೀವಂತವಾಗಿ ಎದ್ದುಬರುವನು. ಮೊಟ್ಟಮೊದಲನೆಯದಾಗಿ ಕ್ರಿಸ್ತನೇ ಎದ್ದುಬಂದನು. ಕ್ರಿಸ್ತನು ಮತ್ತೆ ಬರುವಾಗ ಕ್ರಿಸ್ತನಿಗೆ ಸೇರಿದ ಜನರು ಜೀವಂತವಾಗಿ ಎದ್ದುಬರುವರು. 24ಅನಂತರ ಅಂತ್ಯ ಬರುವುದು. ಕ್ರಿಸ್ತನು ಎಲ್ಲಾ ಅಧಿಪತಿಗಳನ್ನು , ಅಧಿಕಾರಗಳನ್ನು ಮತ್ತು ಶಕ್ತಿಗಳನ್ನು ನಾಶಮಾಡುವನು. ಬಳಿಕ ಕ್ರಿಸ್ತನು ತಂದೆಯಾದ ದೇವರಿಗೆ ರಾಜ್ಯವನ್ನು ಕೊಡುವನು. 25ದೇವರು ಎಲ್ಲಾ ಶತ್ರುಗಳನ್ನು ಕ್ರಿಸ್ತನಿಗೆ ಅಧೀನಗೊಳಿಸುವ ತನಕ ಕ್ರಿಸ್ತನು ಆಳಲೇಬೇಕು. 26ನಾಶವಾಗುವ ಕಡೆಯ ಶತ್ರುವೆಂದರೆ ಮರಣವೇ. 27''ದೇವರು ಸಮಸ್ತವನ್ನು ಆತನಿಗೆ ಅಧೀನಗೊಳಿಸುತ್ತಾನೆ'' ಎಂದು ಪವಿತ್ರ ಗ್ರಂಥವು ಹೇಳುತ್ತದೆ. ''ಸಮಸ್ತವನ್ನು''* ಕ್ರಿಸ್ತನಿಗೆ ಅಧೀನಗೊಳಿಸುತ್ತಾನೆಂದು ಹೇಳುವಾಗ, ಅದು ದೇವರನ್ನು ಒಳಗೊಂಡಿಲ್ಲ ಎಂಬುದು ಸ್ಪಷ್ಟವಾಗಿದೆ. ಸಮಸ್ತವನ್ನು ಕ್ರಿಸ್ತನಿಗೆ ಅಧೀನಗೊಳಿಸಿದಾತನು ದೇವರೇ. 28ಸಮಸ್ತವು ತನ್ನ ಅಧೀನಕ್ಕೆ ಬಂದ ಮೇಲೆ, ಕ್ರಿಸ್ತನು ತನ್ನನ್ನೇ ದೇವರಿಗೆ ಅಧೀನಪಡಿಸಿಕೊಳ್ಳುವನು. ಸಮಸ್ತವನ್ನು ಕ್ರಿಸ್ತನಿಗೆ ಅಧೀನಪಡಿಸಿ ದಾತನು ದೇವರೇ. ಹೀಗೆ ದೇವರು ಸಮಸ್ತಕ್ಕೂ ಸರ್ವಾಧಿ ಪತಿಯಾಗುವನು.

29ಸತ್ತವರಿಗೆ ಪುನರುತ್ಥಾನವಿಲ್ಲವಾದರೆ ಸತ್ತುಹೋದವರಿಗೋಸ್ಕರ ದೀಕ್ಷಾಸ್ನಾನ ಮಾಡಿಸಿಕೊಂಡ ಜನರು ಏನು ಮಾಡುವರು? ಸತ್ತವರಿಗೆ ಪುನರುತ್ಥಾನವಿಲ್ಲವಾದರೆ, ಜನರು ಅವರಿಗೋಸ್ಕರ ದೀಕ್ಷಾಸ್ನಾನ ಮಾಡಿಸಿಕೊಳ್ಳುವುದೇಕೆ?

30ನಮ್ಮ ವಿಷಯವೇನು? ನಾವು ನಮ್ಮನ್ನು ಪ್ರತಿ ತಾಸಿನಲ್ಲಿಯೂ ಅಪಾಯಕ್ಕೆ ಒಡ್ಡುವುದು ಏಕೆ? 31ನಾನು ಪ್ರತಿದಿನವೂ ಸಾಯುತ್ತೇನೆ. ಸಹೋದರರೇ, ನಮ್ಮ ಪ್ರಭುವಾದ ಕ್ರಿಸ್ತ ಯೇಸುವಿನಲ್ಲಿ ನಾನು ನಿಮ್ಮ ಬಗ್ಗೆ ಹೆಮ್ಮೆಪಡುವುದು ಎಷ್ಟು ಸತ್ಯವೊ ಅಷ್ಟೇ ಸತ್ಯ ಆದಾಗಿದೆ. 32ಕೇವಲ ನನ್ನ ಮಾನುಷ ಸ್ವಭಾವದಿಂದ ನಾನು ಎಫೆಸದಲ್ಲಿ ದುಷ್ಟಮೃಗಗಳೊಂದಿಗೆ ಹೋರಾಡಿದ್ದರೆ, ಆದರಿಂದ ನನಗೇನು ಪ್ರಯೋಜನ? ಸತ್ತವರಿಗೆ ಪುನರುತ್ಥಾನವಿಲ್ಲದಿದ್ದರೆ, ''ತಿನ್ನೋಣ, ಕುಡಿಯೋಣ, ಏಕೆಂದರೆ ನಾವು ನಾಳೆ ಸಾಯುತ್ತೇವೆ.''*

33ಮೋಸಹೋಗಬೇಡಿರಿ. ''ದುರ್ಜನರ ಸಹವಾಸ ಸದಾಚಾರದ ಭಂಗ'' 34ಸ್ವಸ್ಥಚಿತ್ತರಾಗಿರಿ ಮತ್ತು ಪಾಪಮಾಡುವುದನ್ನು ನಿಲ್ಲಿಸಿರಿ. ನಿಮ್ಮಲ್ಲಿ ಕೆಲವರು ದೇವರನ್ನು ಅರಿತುಕೊಂಡಿಲ್ಲ. ನಿಮಗೆ ನಾಚಿಕೆ ಆಗಲೆಂದು ಇದನ್ನು ಹೇಳುತ್ತಿದ್ದೇನೆ.

### ಯಾವ ಬಗೆಯ ದೇಹವನ್ನು ನಾವು ಹೊಂದಿಕೊಳ್ಳುವೆವು?

35''ಸತ್ತವರು ಹೇಗೆ ಎದ್ದುಬರುವರು? ಅವರಿಗೆ ಯಾವ ಬಗೆಯ ದೇಹವಿರುತ್ತದೆ?'' ಎಂದು ಕೆಲವರು ಕೇಳಬಹುದು.

---

**ಸಮಸ್ತವನ್ನು** ಕೀರ್ತನೆ 8:6.

**ತಿನ್ನೋಣ … ಸಾಯುತ್ತೇವೆ** ಯೆಶಾಯ 22:13; 56:12. ಲೂಕ 12:19,20.

36ಅವು ಮೂಢ ಪ್ರಶ್ನೆಗಳು. ನೀವು ಬೀಜವನ್ನು ಬಿತ್ತಿದಾಗ, ಆ
ಬೀಜವು ಜೀವ ಹೊಂದಿಕೊಂಡು ಬೆಳೆಯುವುದಕ್ಕಿಂತ ಮುಂಚೆ
ಸಾಯಲೇಬೇಕು. 37ನೀವು ಬೀಜವನ್ನು ಬಿತ್ತುವಾಗ, ಆ ಬೀಜವು
ಕೇವಲ ಕಾಳಾಗಿರುತ್ತದೆಯೇ ಹೊರತು ಮುಂದೆ ಹುಟ್ಟಿಬರ
ಲಿರುವ ಗಿಡವಾಗಿರುವುದಿಲ್ಲ. ನೀವು ಬಿತ್ತುವ ಬೀಜವು ಕೇವಲ
ಕಾಳಷ್ಟೆ. ಅದು ಗೋದಿಯಾಗಿರಬಹುದು ಅಥವಾ ಬೇರೆ
ಕಾಳಾಗಿರಬಹುದು. 38ಆದರೆ ದೇವರು ತನ್ನ ಯೋಜನೆಗನು
ಸಾರವಾಗಿ ಅದಕ್ಕೆ ದೇಹವನ್ನು ಕೊಡುತ್ತಾನೆ ಮತ್ತು ದೇವರು
ಪ್ರತಿಯೊಂದು ಬಗೆಯ ಬೀಜಕ್ಕೆ ಅದರದೇ ಆದ ದೇಹವನ್ನು
ಕೊಡುತ್ತಾನೆ. 39ಎಲ್ಲಾ ಶರೀರಗಳು ಒಂದೇ ರೀತಿಯ ಮಾಂಸ
ವನ್ನು ಹೊಂದಿರುವುದಿಲ್ಲ. ಜನರಿಗೆ ಒಂದು ಬಗೆಯ ಮಾಂಸ
ವಿರುತ್ತದೆ; ಪ್ರಾಣಿಗಳಿಗೆ ಮತ್ತೊಂದು ಬಗೆಯ ಮಾಂಸವಿರು
ತ್ತದೆ; ಪಕ್ಷಿಗಳಿಗೆ ಇನ್ನೊಂದು ಬಗೆಯ ಮಾಂಸವಿರುತ್ತದೆ.
ಮೀನುಗಳು ಬೇರೊಂದು ರೀತಿಯ ಮಾಂಸವನ್ನು ಹೊಂದಿರು
ತ್ತವೆ. 40ಇದಲ್ಲದೆ ಪರಲೋಕದ ಶರೀರಗಳಿವೆ ಮತ್ತು
ಭೂಲೋಕದ ಶರೀರಗಳಿವೆ. ಪರಲೋಕದ ಶರೀರಗಳಿಗೆ
ಒಂದು ಬಗೆಯ ಸೌಂದರ್ಯವಿರುತ್ತದೆ. ಭೂಲೋಕದ
ಶರೀರಗಳಿಗೆ ಮತ್ತೊಂದು ಬಗೆಯ ಸೌಂದರ್ಯವಿರುತ್ತದೆ.
41ಸೂರ್ಯನಿಗೆ ಒಂದು ಬಗೆಯ ಸೌಂದರ್ಯವಿದೆ; ಚಂದ್ರನಿಗೆ
ಮತ್ತೊಂದು ಬಗೆಯ ಸೌಂದರ್ಯವಿದೆ. ನಕ್ಷತ್ರಗಳಿಗೆ
ಇನ್ನೊಂದು ಬಗೆಯ ಸೌಂದರ್ಯವಿದೆ. ಮತ್ತು ಪ್ರತಿಯೊಂದು
ನಕ್ಷತ್ರವು ತನ್ನದೇ ಆದ ಸೌಂದರ್ಯವನ್ನು ಹೊಂದಿದೆ.

42ಸತ್ತವರಿಗಾಗುವ ಪುನರುತ್ಥಾನವು ಅದೇ ರೀತಿಯಾಗಿರು
ವುದು. ಬಿತ್ತಲ್ಪಟ್ಟ ದೇಹವು ಹಾಳಾಗುವುದು ಮತ್ತು ಕೊಳೆತು
ಹೋಗುವುದು. ಆದರೆ ಜೀವಂತವಾಗಿ ಎದ್ದುಬರುವ ಆ
ದೇಹವನ್ನು ನಾಶಮಾಡಲು ಸಾಧ್ಯವೇ ಇಲ್ಲ. 43ದೇಹವು
ಹೀನಾವಸ್ಥೆಯಲ್ಲಿ ಬಿತ್ತಲ್ಪಡುವುದು, ಆದರೆ ಮಹಿಮೆಯೊಡನೆ
ಎದ್ದುಬರುವುದು. ದೇಹವು ಬಿತ್ತಲ್ಪಟ್ಟಾಗ, ಅದು ಬಲಹೀನ
ವಾಗಿರುತ್ತದೆ. ಆದರೆ ಅದು ಎದ್ದುಬಂದಾಗ ಅದಕ್ಕೆ ಶಕ್ತಿ
ಯಿರುತ್ತದೆ. 44ಬಿತ್ತಲ್ಪಟ್ಟ ದೇಹವು ಭೌತಿಕವಾದದ್ದು. ಆದರೆ
ಅದು ಎದ್ದು ಬಂದಾಗ, ಆತ್ಮಿಕ ದೇಹವಾಗಿರುತ್ತದೆ.

ಭೌತಿಕ ದೇಹವಿದೆ. ಆದ್ದರಿಂದ ಆತ್ಮಿಕ ದೇಹವೂ ಇದೆ.
45‘‘ಮೊದಲನೆ ಮನುಷ್ಯನಾದ ಆದಾಮನು ಜೀವಿಸುವ ವ್ಯಕ್ತಿ
ಯಾದನು’’ * ಎಂದು ಪವಿತ್ರ ಗ್ರಂಥದಲ್ಲಿ ಬರೆಯಲಾಗಿದೆ.
ಆದರೆ ಕೊನೆಯ ಆದಾಮನು (ಕ್ರಿಸ್ತನು) ಜೀವಕೊಡುವ
ಜೀವಾತ್ಮನಾದನು. 46ಮೊದಲು ಬಂದವನು ಆತ್ಮಿಕ ಮನುಷ್ಯ
ನಲ್ಲ, ಅವನು ಪ್ರಾಕೃತ ಮನುಷ್ಯ. ಅನಂತರ ಆತ್ಮಿಕ ಮನುಷ್ಯನು
ಬಂದನು. 47ಮೊದಲನೆಯ ಮನುಷ್ಯನು ಭೂಮಿಯ
ಧೂಳಿನಿಂದ ಬಂದನು. ಆದರೆ ಎರಡನೆಯ ಮನುಷ್ಯನು
(ಕ್ರಿಸ್ತನು) ಪರಲೋಕದಿಂದ ಬಂದನು. 48ಜನರು ಭೂಮಿಗೆ
ಸಂಬಂಧಪಟ್ಟವರು. ಅವರು ಭೂಮಿಯ ಮೊದಲನೆ ಮನುಷ್ಯ
ನಂತಿದ್ದಾರೆ. ಆದರೆ ಪರಲೋಕಕ್ಕೆ ಸಂಬಂಧಪಟ್ಟವರು ಪರ
ಲೋಕದ ಮನುಷ್ಯನಂತಿದ್ದಾರೆ. 49ಭೂಮಿಯ ಆ ಮನುಷ್ಯ
ನಂತೆಯೇ ನಾವು ನಿರ್ಮಾಣಗೊಂಡೆವು. ಆದ್ದರಿಂದ ಪರ
ಲೋಕದ ಆ ಮನುಷ್ಯನಂತೆಯೇ ನಾವು ನಿರ್ಮಾಣ
ಗೊಳ್ಳುವೆವು.

50ಸಹೋದರ ಸಹೋದರಿಯರೇ, ನಾನು ಹೇಳುವು
ದೇನೆಂದರೆ, ಮಾಂಸ ಮತ್ತು ರಕ್ತ (ಭೌತಿಕ ದೇಹ) ಪರಲೋಕ
ರಾಜ್ಯದಲ್ಲಿ ಪಾಲುಹೊಂದಲು ಸಾಧ್ಯವಿಲ್ಲ. ನಾಶವಾಗು
ವಂಥದ್ದು ಎಂದಿಗೂ ನಾಶವಾಗದ ಒಂದರಲ್ಲಿ ಪಾಲು
ಹೊಂದಲು ಸಾಧ್ಯವಿಲ್ಲ. 51ಆದರೆ ಕೇಳಿರಿ, ನಾನು ನಿಮಗೆ ಈ
ರಹಸ್ಯವೊಂದನ್ನು ತಿಳಿಸುತ್ತೇನೆ. ನಾವೆಲ್ಲರೂ ಸಾಯುವುದಿಲ್ಲ.
ಆದರೆ ನಾವೆಲ್ಲರೂ ಮಾರ್ಪಾಟಾಗುವೆವು. 52ಇದಕ್ಕೆ ಕೇವಲ
ಒಂದು ಕ್ಷಣಕಾಲ ಸಾಕು. ರೆಪ್ಪೆ ಬಡಿಯುವಷ್ಟು ವೇಗವಾಗಿ ನಾವು
ಮಾರ್ಪಾಟಾಗುವೆವು. ಕಡೇ ತುತ್ತೂರಿಯನ್ನು ಊದಿದಾಗ
ಇದು ಸಂಭವಿಸುವುದು. ತುತ್ತೂರಿಯನ್ನು ಊದಲಾಗುವುದು;
ಆಗ ಸತ್ತುಹೋಗಿದ್ದ ವಿಶ್ವಾಸಿಗಳು ಸದಾಕಾಲ ಜೀವಿಸುವು
ದಕ್ಕಾಗಿ ಎಬ್ಬಿಸಲ್ಪಡುವರು ಮತ್ತು ನಾವು ಮಾರ್ಪಾಟಾಗುವೆವು.
53ಅಳಿದುಹೋಗುವ ಈ ದೇಹವು ಅಳಿದುಹೋಗದ್ದನ್ನು ಧರಿಸಿ
ಕೊಳ್ಳುವುದು. ಮರಣಾಧೀನವಾದ ಈ ದೇಹವು ಅಮರತ್ವವನ್ನು
ಧರಿಸಿಕೊಳ್ಳುವುದು. 54ಅಳಿದುಹೋಗುವ ಈ ದೇಹ ಅಮರತ್ವ
ವನ್ನು ಧರಿಸಿಕೊಂಡಾಗ ಪವಿತ್ರ ಗ್ರಂಥದ ಈ ಮಾತುಗಳು
ನೆರವೇರುತ್ತವೆ:

‘‘ಮರಣವು ಜಯದಲ್ಲಿ ನುಂಗಿಯೇ
ಹೋಯಿತು.’’

*ಯೆಶಾಯ 25:8*

55‘‘ಮರಣವೇ ನಿನ್ನ ಜಯವೆಲ್ಲಿ? ಕೇಡುಮಾಡಲು
ನಿನಗಿರುವ ಶಕ್ತಿ ಎಲ್ಲಿ?’’

*ಹೋಶೇಯ 13:14*

56ಕೇಡುಮಾಡಲು ಮರಣಕ್ಕಿರುವ ಶಕ್ತಿಯು ಪಾಪವೇ.
ಪಾಪದ ಶಕ್ತಿಯು ಧರ್ಮಶಾಸ್ತ್ರವೇ. 57ಆದರೆ ನಾವು ದೇವರಿಗೆ
ಕೃತಜ್ಞತಾಸ್ತುತಿ ಮಾಡುತ್ತೇವೆ. ನಮ್ಮ ಪ್ರಭುವಾದ ಯೇಸು ಕ್ರಿಸ್ತನ
ಮೂಲಕ ಆತನು ನಮಗೆ ಜಯವನ್ನು ಕೊಡುತ್ತಾನೆ.

58ಆದ್ದರಿಂದ ನನ್ನ ಪ್ರಿಯ ಸಹೋದರ ಸಹೋದರಿಯರೇ,
ದೃಢವಾಗಿರಿ, ನಿಶ್ಚಲರಾಗಿರಿ. ಪ್ರಭುವಿನ ಸೇವೆಗಾಗಿ ನಿಮ್ಮನ್ನು
ಯಾವಾಗಲೂ ಸಂಪೂರ್ಣವಾಗಿ ಪ್ರತಿಷ್ಠಿಸಿಕೊಳ್ಳಿರಿ. ನೀವು
ಪ್ರಭುವಿಗಾಗಿ ಪಡುವ ಪ್ರಯಾಸವು ಎಂದಿಗೂ ವ್ಯರ್ಥ
ವಾಗುವುದಿಲ್ಲ.

### ಇತರ ವಿಶ್ವಾಸಿಗಳಿಗಾಗಿ ಹಣ ಸಂಗ್ರಹಣೆ

16 ದೇವಜನರಿಗೋಸ್ಕರ ಹಣ ಸಂಗ್ರಹಿಸುವುದರ
ವಿಷಯವಾಗಿ ಈಗ ನಾನು ಬರೆಯುತ್ತೇನೆ. ನಾನು
ಗಲಾತ್ಯ ಸಭೆಗಳಿಗೆ ಹೇಳಿಕೊಟ್ಟಂತೆ ನೀವೂ ಮಾಡಿರಿ. 2ನಿಮ್ಮಲ್ಲಿ
ಪ್ರತಿಯೊಬ್ಬನು ತನಗಾದ ಅಭಿವೃದ್ಧಿಗೆ ತಕ್ಕಂತೆ ನಿಮ್ಮಿಂದ
ಸಾಧ್ಯವಾದಷ್ಟು ಹಣವನ್ನು ಪ್ರತಿವಾರದ ಮೊದಲನೆಯ ದಿನವೇ
ಪ್ರತ್ಯೇಕಿಸಿ, ವಿಶೇಷವಾದ ಸ್ಥಳವೊಂದರಲ್ಲಿ ಇಟ್ಟಿರಬೇಕು. ಆಗ
ನಾನು ನಿಮ್ಮಲ್ಲಿಗೆ ಬಂದನಂತರ ಹಣವನ್ನು ಸಂಗ್ರಹಿಸುವ
ಅವಶ್ಯಕತೆಯಿರುವುದಿಲ್ಲ. 3ನಾನು ಬಂದಾಗ, ನಿಮ್ಮ ಕೊಡುಗೆ
ಯನ್ನು ಕೆಲವರ ಮೂಲಕ ಜೆರುಸಲೇಮಿಗೆ ಕಳುಹಿಸುವೆನು.
ನೀವೆಲ್ಲರೂ ಯಾರನ್ನು ಇಷ್ಟಪಡುತ್ತೀರೊ ಅವರಿಗೆ ನಾನು

**ಮೊದಲನೆ ... ವ್ಯಕ್ತಿಯಾದನು** ಆದಿಕಾಂಡ 2:7.

ಪರಿಚಯದ ಪತ್ರಗಳನ್ನು ಕೊಟ್ಟು ಕಳುಹಿಸುವೆನು. [4]ಒಂದು ವೇಳೆ, ನಾನು ಸಹ ಹೋಗುವುದು ಒಳ್ಳೆಯದೆನಿಸಿದರೆ, ಆ ಜನರು ನನ್ನೊಂದಿಗೆ ಬರಲಿ.

### ಪೌಲನ ಯೋಜನೆಗಳು

[5]ನಾನು ಮಕೆದೋನಿಯದ ಮೂಲಕ ಹೋಗ ಬೇಕೆಂದಿರುವೆ. ಆದ್ದರಿಂದ ಮಕೆದೋನಿಯದ ಪ್ರವಾಸವನ್ನು ಮುಗಿಸಿಕೊಂಡು ನಿಮ್ಮಲ್ಲಿಗೆ ಬರುವೆನು. [6]ನಾನು ನಿಮ್ಮೊಂದಿಗೆ ಸ್ವಲ್ಪಕಾಲ ಇಳಿದುಕೊಳ್ಳಬಹುದು. ಒಂದುವೇಳೆ ಚಳಿಗಾಲವನ್ನು ಪೂರ್ತಿಯಾಗಿ ನಿಮ್ಮಲ್ಲಿ ಕಳೆಯಬೇಕಾಗಬಹುದು. ಬಳಿಕ, ನಾನು ಹೋಗಬೇಕಾದ ಸ್ಥಳಕ್ಕೆ ನೀವು ನನ್ನನ್ನು ಕಳುಹಿಸಿ ಕೊಡಬೇಕು.

[7]ಈಗ ನಿಮ್ಮ ಬಳಿಗೆ ಬರಲು ನನಗೆ ಇಷ್ಟವಿಲ್ಲ. ಏಕೆಂದರೆ ನಾನು ಬೇರೆ ಸ್ಥಳಗಳಿಗೆ ಹೋಗಬೇಕಾಗಿರುವುದರಿಂದ ನಿಮ್ಮೊಂದಿಗೆ ಬಹಳ ಕಾಲವಿರಲು ಸಾಧ್ಯವಿಲ್ಲ. ಪ್ರಭುವು ಅವಕಾಶಕೊಡುವುದಾದರೆ, ನಾನು ನಿಮ್ಮೊಂದಿಗೆ ದೀರ್ಘಕಾಲ ತಂಗುವ ನಿರೀಕ್ಷೆಯಿಂದಿದ್ದೇನೆ. [8]ಆದರೆ ನಾನು ಪಂಚಶತ್ತಮ ಹಬ್ಬದವರೆಗೆ ಎಫೆಸದಲ್ಲಿ ಇರುತ್ತೇನೆ. [9]ಯಾಕೆಂದರೆ ಮಹತ್ವ ವಾದ ಮತ್ತು ಫಲಭರಿತವಾದ ಸೇವೆಯನ್ನು ಮಾಡಲು ಇಲ್ಲಿ ನನಗೆ ಒಳ್ಳೆಯ ಅವಕಾಶಗಳಿವೆ. ಆದರೂ ಇಲ್ಲಿ ನನಗೆ ಅನೇಕ ವಿರೋಧಿಗಳಿದ್ದಾರೆ. [10]ತಿಮೊಥೆಯನು ನಿಮ್ಮ ಬಳಿಗೆ ಬರ ಬಹುದು. ಅವನು ನಿಮ್ಮೊಂದಿಗಿರುವಾಗ ಅವನಿಗೆ ಚಿಂತೆಯಾಗ ದಂತೆ ನೋಡಿಕೊಳ್ಳಿರಿ. ನಾನು ಪ್ರಭುವಿಗೋಸ್ಕರ ಕೆಲಸ ಮಾಡುತ್ತಿರುವಂತೆ ಅವನು ಸಹ ಮಾಡುತ್ತಿದ್ದಾನೆ. [11]ಆದ್ದರಿಂದ ನಿಮ್ಮಲ್ಲಿ ಯಾರೂ ಅವನನ್ನು ತಿರಸ್ಕರಿಸಬಾರದು. ಅವನನ್ನು ನನ್ನ ಬಳಿಗೆ ಸಮಾಧಾನದಿಂದ ಕಳುಹಿಸಿಕೊಡಿರಿ. ಅವನು ಸಹೋದರ ರೊಂದಿಗೆ ಬರುವುದನ್ನು ನಾನು ಎದುರು ನೋಡುತ್ತಿದ್ದೇನೆ.

[12]ನಮ್ಮ ಸಹೋದರನಾದ ಅಪೊಲ್ಲೋಸನ ಬಗ್ಗೆ ನಾನು ಹೇಳುವುದೇನಂದರೆ, ಇತರ ಸಹೋದರರೊಂದಿಗೆ ನಿಮ್ಮನ್ನು ಸಂದರ್ಶಿಸಲು ನಾನು ಅವನನ್ನು ಬಹಳವಾಗಿ ಪ್ರೋತ್ಸಾಹಿಸಿ ದ್ದೇನೆ. ಆದರೆ ಈಗ ಬರುವುದಕ್ಕೆ ಅವನಿಗೆ ನಿಶ್ಚಯವಾಗಿ ಇಷ್ಟವಿರಲಿಲ್ಲ. ಆದರೆ ಅವಕಾಶ ಸಿಕ್ಕಿದಾಗ ಅವನು ನಿಮ್ಮ ಬಳಿಗೆ ಬರುವನು.

### ಅಂತಿಮ ಮಾತುಗಳು

[13]ಜಾಗರೂಕರಾಗಿರಿ. ನಂಬಿಕೆಯಲ್ಲಿ ದೃಢವಾಗಿರಿ. ಧೈರ್ಯದಿಂದಿರಿ ಮತ್ತು ಬಲಿಷ್ಠರಾಗಿರಿ. [14]ಪ್ರತಿಯೊಂದನ್ನು ಪ್ರೀತಿಯಿಂದ ಮಾಡಿರಿ.

[15]ಅಖಾಯದಲ್ಲಿ ಪ್ರಥಮ ವಿಶ್ವಾಸಿಗಳಾದ ಸ್ತೆಫನನನ್ನು ಮತ್ತು ಅವನ ಕುಟುಂಬದವರನ್ನು ನೀವು ಬಲ್ಲಿರಿ. ಅವರು ದೇವರ ಸೇವೆಗಾಗಿ ತಮ್ಮನ್ನು ಒಪ್ಪಿಸಿಕೊಂಡಿದ್ದಾರೆ. ಸಹೋದರ ಸಹೋದರಿಯರೇ, ನಾನು ನಿಮ್ಮನ್ನು ಕೇಳಿಕೊಳ್ಳುವು ದೇನಂದರೆ, [16]ಈ ರೀತಿಯ ಮುಂದಾಳುಗಳನ್ನು ಮತ್ತು ಅವರೊಂದಿಗೆ ಕೆಲಸ ಮಾಡುವವರನ್ನು ಹಾಗೂ ಸೇವೆ ಮಾಡುವವರನ್ನು ಹಿಂಬಾಲಿಸಿರಿ.

[17]ಸ್ತೆಫನನು, ಫೊರ್ತುನಾತನು ಮತ್ತು ಅಖಾಯಿಕನು ಬಂದುದರಿಂದ ನನಗೆ ಸಂತೋಷವಾಯಿತು. ನೀವು ಇಲ್ಲದ್ದ ರಿಂದ ನನಗುಂಟಾದ ಕೊರತೆಯನ್ನು ಅವರು ನೀಗಿಸಿದ್ದಾರೆ. [18]ಅವರು ನನ್ನ ಆತ್ಮಕ್ಕೂ ನಿಮ್ಮ ಆತ್ಮಗಳಿಗೂ ವಿಶ್ರಾಂತಿಯನ್ನು ಕೊಟ್ಟಿದ್ದಾರೆ. ಇಂಥ ಜನರ ಮೌಲ್ಯವನ್ನು ನೀವು ಗುರುತಿಸ ಬೇಕು. [19]ಏಷ್ಯಾದ ಸಭೆಗಳವರು ನಿಮಗೆ ವಂದನೆಗಳನ್ನು ತಿಳಿಸಿದ್ದಾರೆ. ಅಕ್ವಿಲನು ಮತ್ತು ಪ್ರಿಸ್ಕಿಲ್ಲಳು ಪ್ರಭುವಿನ ಹೆಸರಿನಲ್ಲಿ ನಿಮಗೆ ಬಹಳ ವಂದನೆಗಳನ್ನು ತಿಳಿಸಿದ್ದಾರೆ. ಅಲ್ಲದೆ ಅವರ ಮನೆಯಲ್ಲಿ ಸೇರಿಬರುವ ಸಭೆಯವರು ನಿಮಗೆ ವಂದನೆ ತಿಳಿಸಿದ್ದಾರೆ. [20]ಇಲ್ಲಿರುವ ಎಲ್ಲಾ ಸಹೋದರ ಸಹೋದರಿ ಯರು ನಿಮಗೆ ವಂದನೆ ತಿಳಿಸಿದ್ದಾರೆ. ನೀವು ಒಬ್ಬರನ್ನೊಬ್ಬರು ಭೇಟಿಯಾಗುವಾಗ ಪವಿತ್ರವಾದ ಮುದ್ದಿಡಿರಿ. [21]ಪೌಲನಾದ ನಾನು ನನ್ನ ಕೈಯಾರೆ ಈ ವಂದನೆಗಳನ್ನು ಬರೆಯುತ್ತಿದ್ದೇನೆ.

[22]ಯಾವನಾದರೂ ಪ್ರಭುವನ್ನು ಪ್ರೀತಿಸದಿದ್ದರೆ, ಅವನು ಜೀವದಿಂದ ಬೇರ್ಪಟ್ಟು ನಿತ್ಯನಾಶನ ಹೊಂದಲಿ! ಪ್ರಭುವೇ ಬಾ!. [23]ಪ್ರಭುವಾದ ಯೇಸುವಿನ ಕೃಪೆಯು ನಿಮ್ಮೊಂದಿಗಿರಲಿ. [24]ಕ್ರಿಸ್ತ ಯೇಸುವಿನಲ್ಲಿ ನಿಮ್ಮೆಲ್ಲರೊಂದಿಗೆ ನನ್ನ ಪ್ರೀತಿಯಿರಲಿ!

# ಕೊರಿಂಥದವರಿಗೆ ಬರೆದ ಎರಡನೆ ಪತ್ರ

1 ಕ್ರಿಸ್ತ ಯೇಸುವಿನ ಅಪೊಸ್ತಲನಾದ ಪೌಲನು ಬರೆಯುವ
ಪತ್ರ. ನಾನು ದೇವರ ಚಿತ್ತಾನುಸಾರ ಅಪೊಸ್ತಲನಾಗಿದ್ದೇನೆ.
ಕೊರಿಂಥದಲ್ಲಿರುವ ದೇವರ ಸಭೆಯವರಿಗೂ ಇಡೀ ಅಖಾಯ
ಸೀಮೆಯಲ್ಲಿರುವ ದೇವಜನರೆಲ್ಲರಿಗೂ ನಾನು ಈ ಪತ್ರವನ್ನು
ಕ್ರಿಸ್ತನಲ್ಲಿ ನಮ್ಮ ಸಹೋದರನಾದ ತಿಮೊಥೆಯನೊಡನೆ ಸೇರಿ
ಬರೆಯುತ್ತಿದ್ದೇನೆ.
2ನಮ್ಮ ತಂದೆಯಾದ ದೇವರಿಂದಲೂ ಪ್ರಭುವಾದ ಯೇಸು
ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ಆಗಲಿ.

### ಪೌಲನು ದೇವರಿಗೆ ಸಲ್ಲಿಸುವ ಕೃತಜ್ಞತಾಸ್ತುತಿ

3ನಮ್ಮ ಪ್ರಭುವಾದ ಯೇಸು ಕ್ರಿಸ್ತನ ದೇವರೂ ತಂದೆಯೂ
ಆಗಿರುವಾತನಿಗೆ ಸ್ತೋತ್ರವಾಗಲಿ. ದೇವರು ಕನಿಕರದಿಂದ
ತುಂಬಿರುವ ತಂದೆಯಾಗಿದ್ದಾನೆ. ಆತನು ಸಕಲ ವಿಧವಾಗಿ
ಸಂತೈಸುವ ದೇವರಾಗಿದ್ದಾನೆ. 4ನಮಗೆ ಸಂಕಷ್ಟವಿರುವಾಗಲೆಲ್ಲಾ
ಆತನು ನಮ್ಮನ್ನು ಸಂತೈಸುತ್ತಾನೆ; ಸಂಕಷ್ಟಗಳಲ್ಲಿರುವ ಇತರ
ಜನರನ್ನು ಸಂತೈಸಲು ಇದರ ಮೂಲಕ ನಾವು ಸಹ ಶಕ್ತರಾಗು
ತ್ತೇವೆ. ದೇವರು ನಮ್ಮನ್ನು ಸಂತೈಸುವಂತೆಯೇ ನಾವು ಸಹ
ಅವರನ್ನು ಸಂತೈಸಬಲ್ಲವರಾಗುತ್ತೇವೆ. 5ನಾವು ಕ್ರಿಸ್ತನ ಅನೇಕ
ಬಾಧೆಗಳಲ್ಲಿ ಪಾಲುಗಾರರಾಗುತ್ತೇವೆ. ಅದೇ ರೀತಿಯಲ್ಲಿ,
ಕ್ರಿಸ್ತನ ಮೂಲಕ ಹೇರಳವಾದ ಆದರಣೆಯು ನಮಗೆ ಬರು
ತ್ತದೆ. 6ನಮಗೆ ಸಂಕಷ್ಟಗಳಿರುವುದಾದರೆ, ಆ ಸಂಕಷ್ಟಗಳು ನಿಮ್ಮ
ಆದರಣೆಗಾಗಿಯೇ ಮತ್ತು ರಕ್ಷಣೆಗಾಗಿಯೇ. ನಮಗೆ ಆದರಣೆ
ಇರುವುದಾದರೆ, ಅದು ನಿಮ್ಮ ಆದರಣೆಗಾಗಿಯೇ. ನಮಗಿರು
ವಂಥ ಬಾಧೆಗಳನ್ನು ನೀವು ತಾಳ್ಮೆಯಿಂದ ಸ್ವೀಕರಿಸಿಕೊಳ್ಳಲು
ಇದು ನಿಮಗೆ ಸಹಾಯವಾಗಿದೆ. 7ನಿಮ್ಮ ವಿಷಯದಲ್ಲಿ ನಮಗೆ
ಬಲವಾದ ನಿರೀಕ್ಷೆಯಿದೆ. ನೀವು ನಮ್ಮ ಬಾಧೆಗಳಲ್ಲಿ ಪಾಲು
ಗಾರರಾಗಿರುವುದರಿಂದ ನಮ್ಮ ಆದರಣೆಯಲ್ಲಿಯೂ ನೀವು
ಪಾಲುಗಾರರಾಗುತ್ತೀರಿ ಎಂಬುದು ನನಗೆ ತಿಳಿದದೆ. 8ಸಹೋ
ದರ ಸಹೋದರಿಯರೇ, ನಾವು ಏಷ್ಯಾ ಪ್ರಾಂತ್ಯದಲ್ಲಿ ಅನುಭವಿ
ಸಿದ ಸಂಕಟದ ಬಗ್ಗೆ ನೀವು ತಿಳಿದುಕೊಳ್ಳಬೇಕೆಂದು ನಾವು
ಅಪೇಕ್ಷಿಸುತ್ತೇವೆ. ಅಲ್ಲಿ ನಮಗೆ ಅಪಾರವಾದ ಭಾರಗಳಿದ್ದವು.
ಆ ಭಾರಗಳು ನಮ್ಮ ಸ್ವಂತ ಶಕ್ತಿಗಿಂತಲೂ ಅಧಿಕವಾಗಿದ್ದವು.
ಜೀವಸಹಿತ ಉಳಿ ಯುತ್ತೇವೆ ಎಂಬ ನಿರೀಕ್ಷೆಯನ್ನು ಸಹ ನಾವು
ಬಿಟ್ಟುಕೊಟ್ಟೆವು. 9ನಿಜವಾಗಿಯೂ ನಾವು ಸಾಯುತ್ತೇವೆಂದು
ನಮ್ಮ ಹೃದಯಗಳಲ್ಲಿ ನಂಬಿಕೊಂಡೆವು. ನಾವು ನಮ್ಮಲ್ಲಿ ಭರವಸೆ
ಇಡದಂತೆಯೂ ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸುವ
ದೇವರಲ್ಲಿ ಭರವಸೆ ಇಡಬೇಕೆಂತಲೂ ಇದಾಯಿತು.
10ಮರಣದ ಈ ಮಹಾ ಅಪಾಯಗಳಿಂದ ದೇವರು ನಮ್ಮನ್ನು
ರಕ್ಷಿಸಿದನು. ಮತ್ತು ಇನ್ನು ಮುಂದೆಯೂ ರಕ್ಷಿಸುವನು. ನಾವು
ಆತನಲ್ಲಿ ಭರವಸೆ ಇಟ್ಟಿದ್ದೇವೆ. ಆತನು ನಮ್ಮನ್ನು ಇನ್ನು
ಮುಂದೆಯೂ ರಕ್ಷಿಸುವನು. 11ಇದಲ್ಲದೆ ನೀವು ನಿಮ್ಮ
ಪ್ರಾರ್ಥನೆಗಳ ಮೂಲಕ ನಮಗೆ ಸಹಾಯ ಮಾಡಬಲ್ಲಿರಿ. ಆಗ,
ನಿಮ್ಮ ಪ್ರಾರ್ಥನೆಗಳ ನಿಮಿತ್ತ ದೇವರು ನಮ್ಮನ್ನು ಆಶೀರ್ವದಿಸಿ
ರುವುದನ್ನು ಕಂಡು ಅನೇಕರು ದೇವರಿಗೆ ಕೃತಜ್ಞತಾಸ್ತುತಿ
ಮಾಡುವರು.

### ಪೌಲನ ಯೋಜನೆಗಳಲ್ಲಿ ಬದಲಾವಣೆ

12ನಾವು ಈ ವಿಷಯದಲ್ಲಿ ಹೆಮ್ಮೆಪಡುತ್ತೇವೆ ಮತ್ತು ಇದು
ಸತ್ಯವೆಂದು ನಾನು ಹೃದಯಪೂರ್ವಕವಾಗಿ ಹೇಳಬಲ್ಲೆನು.
ಅದೇನೆಂದರೆ ಈ ಲೋಕದಲ್ಲಿ ಮಾಡಿದ ಎಲ್ಲಾ ಕಾರ್ಯಗಳನ್ನು
ದೇವರಿಂದ ಕೊಡಲ್ಪಟ್ಟ ಯಥಾರ್ಥವಾದ ಮತ್ತು ಪರಿಶುದ್ಧ
ವಾದ ಹೃದಯದಿಂದ ಮಾಡಿದೆವು. ನಾವು ನಿಮ್ಮ ಮಧ್ಯದಲ್ಲಿ
ಮಾಡಿದ ಕಾರ್ಯಗಳಲ್ಲಂತೂ ಇದು ಮತ್ತಷ್ಟು ಸತ್ಯವಾಗಿದೆ.
ನಾವು ಇದನ್ನು ಮಾಡಿದ್ದು ದೇವರ ಕೃಪೆಯಿಂದಲೇ ಹೊರತು
ಲೋಕದ ಜ್ಞಾನದಿಂದಲ್ಲ. 13-14ನೀವು ಓದಿ ಅರ್ಥಮಾಡಿ
ಕೊಳ್ಳಬಲ್ಲ ಸಂಗತಿಗಳನ್ನು ಮಾತ್ರ ನಾನು ನಿಮಗೆ ಬರೆಯು
ತ್ತೇನೆ. ನಮ್ಮ ವಿಷಯವಾದ ಕೆಲವು ಸಂಗತಿಗಳನ್ನು ನೀವು
ಈಗಾಗಲೇ ಸ್ವಲ್ಪ ಅರ್ಥಮಾಡಿಕೊಂಡಂತೆ ಸಂಪೂರ್ಣವಾಗಿ
ಅರ್ಥಮಾಡಿಕೊಳ್ಳುತ್ತೀರೆಂಬ ನಿರೀಕ್ಷೆ ನನಗಿದೆ. ನಮ್ಮ
ಪ್ರಭುವಾದ ಯೇಸು ಕ್ರಿಸ್ತನು ಮತ್ತೆ ಬಂದಾಗ ನಾವು ನಿಮ್ಮ
ವಿಷಯದಲ್ಲಿ ಹೆಮ್ಮೆಪಡುವಂತೆ ನೀವೂ ನಮ್ಮ ವಿಷಯದಲ್ಲಿ
ಹೆಮ್ಮೆಪಡಲಾಗುವಂತೆ ನೀವು ಅರ್ಥಮಾಡಿಕೊಳ್ಳುತ್ತೀರಿ ಎಂಬ
ಭರವಸೆ ನನಗಿದೆ. 15ನಾನು ಈ ಎಲ್ಲಾ ವಿಷಯಗಳಲ್ಲಿ ಬಹು
ಭರವಸೆ ಉಳ್ಳವನಾಗಿದ್ದೆನು. ಆದ್ದರಿಂದ ನಿಮ್ಮನ್ನು ಮೊದಲು
ಸಂದರ್ಶಿಸಲು ನಾನು ಯೋಜನೆಗಳನ್ನು ಮಾಡಿದೆನು. ಆಗ
ನಿಮಗೆ ಎರಡು ಸಲ ಆಶೀರ್ವಾದವಾಗಬಹುದಿತ್ತು. 16ನಾನು
ಮಕೆದೋನಿಯಕ್ಕೆ ಹೋಗುವಾಗಲೂ ಬಳಿಕ ಅಲ್ಲಿಂದ
ಹಿಂತಿರುಗಿ ಬರುವಾಗಲೂ ನಿಮ್ಮ ಬಳಿಗೆ ಬರಬೇಕೆಂದಿದ್ದೆ.
ಜುದೇಯಕ್ಕೆ ಪ್ರವಾಸ ಕೈಕೊಳ್ಳಲು ನಿಮ್ಮಿಂದ ಸಹಾಯವನ್ನು
ಪಡೆದುಕೊಳ್ಳಬೇಕೆಂದಿದ್ದೆ. 17ನಾನು ಆ ಯೋಜನೆಗಳನ್ನು
ಮಾಡಿದಾಗ ನಿಮ್ಮ ಬಳಿಗೆ ಬರುವ ಉದ್ದೇಶ ನಿಜವಾಗಿಯೂ
ನನಗಿರಲಿಲ್ಲವೆಂದು ಯೋಚಿಸುತ್ತೀರಾ? ನಾನು ಪ್ರಾಪಂಚಿಕ
ರಂತೆ ಯೋಜನೆಗಳನ್ನು ಮಾಡಿದೆನೋ? ಅವರಾದರೊ
ಯೋಜನೆಗಳನ್ನು ಮಾಡುವಾಗ ‘‘ಹೌದು, ಹೌದು’’ ಎಂತಲೂ
ಅದೇ ಸಮಯದಲ್ಲಿ ‘‘ಇಲ್ಲ, ಇಲ್ಲ’’ ಎಂತಲೂ ಹೇಳುತ್ತಾರೆ.
18ನೀವು ದೇವರನ್ನು ನಂಬಬಲ್ಲವರಾಗಿದ್ದರೆ, ನಾವು ನಿಮಗೆ

ಏಕಕಾಲದಲ್ಲಿಯೇ ''ಹೌದು'' ಮತ್ತು ''ಇಲ್ಲ'' ಎಂದು ಹೇಳ
ಲಿಲ್ಲವೆಂದು ನೀವು ನಂಬಬಲ್ಲಿರಿ. 19ಸೀಲನು, ತಿಮೊಥೆಯನು
ಮತ್ತು ನಾನು ನಿಮಗೆ ಬೋಧಿಸಿದ ದೇವರ ಮಗನಾದ ಯೇಸು
ಕ್ರಿಸ್ತನು ''ಹೌದೆ''ಂತಲೂ ''ಅಲ್ಲ''ವೆಂತಲೂ ಎರಡು ರೀತಿ
ಯಲ್ಲಿರಲಿಲ್ಲ. ಕ್ರಿಸ್ತನಲ್ಲಿ ಯಾವಾಗಲೂ ಇರುವಂಥದ್ದು
''ಹೌದು'' ಎಂಬುದೇ. 20ದೇವರು ಮಾಡಿದ ವಾಗ್ದಾನಗಳಿಗೆಲ್ಲ
''ಹೌದು'' ಎಂಬ ಉತ್ತರ ಕ್ರಿಸ್ತನೇ ಆಗಿದ್ದಾನೆ. ಆದ್ದರಿಂದಲೇ
ನಾವು ದೇವರ ಮಹಿಮೆಗಾಗಿ ಕ್ರಿಸ್ತನ ಮೂಲಕ ''ಆಮೆನ್''
ಎಂದು ಹೇಳುತ್ತೇವೆ. 21ನಿಮ್ಮನ್ನು ಮತ್ತು ನಮ್ಮನ್ನು ಕ್ರಿಸ್ತನಲ್ಲಿ
ದೃಢಗೊಳಿಸುವಾತನು ದೇವರೇ. ದೇವರು ತನ್ನ ವಿಶೇಷವಾದ
ಆಶೀರ್ವಾದವನ್ನು ನಮಗೆ ಕೊಟ್ಟಿದ್ದಾನೆ. 22ನಾವು ಆತನವ
ರೆಂಬುದನ್ನು ತೋರಿಸುವುದಕ್ಕಾಗಿ ಆತನು ನಮ್ಮ ಮೇಲೆ ಮುದ್ರೆ
ಯನ್ನು ಹಾಕಿದ್ದಾನೆ. ಆತನು ತನ್ನ ಪವಿತ್ರಾತ್ಮನನ್ನು ನಮ್ಮ ಹೃದಯ
ಗಳಲ್ಲಿ ನೆಲೆಗೊಳಿಸಿದ್ದಾನೆ. ಆತನು ನಮಗೆ ಮಾಡಿದ ವಾಗ್ದಾನ
ವನ್ನು ನೆರವೇರಿಸುತ್ತಾನೆ ಎಂಬುದಕ್ಕೆ ಪವಿತ್ರಾತ್ಮನೇ ನಮಗೆ
ಆಧಾರವಾಗಿದ್ದಾನೆ. 23ನಿಮ್ಮನ್ನು ಶಿಕ್ಷಿಸುವುದಕ್ಕಾಗಲಿ ನೋಯಿ
ಸುವುದಕ್ಕಾಗಲಿ ನನಗೆ ಇಷ್ಟವಿರಲಿಲ್ಲ. ಆದಕಾರಣ ನಾನು ನಿಮ್ಮ
ಬಳಿಗೆ ಹಿಂತಿರುಗಿ ಬರಲಿಲ್ಲ. ಇದು ಸತ್ಯ. ಇದಕ್ಕೆ ದೇವರೇ ಸಾಕ್ಷಿ.
24ನಿಮ್ಮ ನಂಬಿಕೆಯನ್ನು ಹತೋಟಿಯಲ್ಲಿಟ್ಟುಕೊಳ್ಳಲು ನಾವು
ಪ್ರಯತ್ನಿಸುತ್ತಿದ್ದೇವೆಂದು ನಾನು ಹೇಳುತ್ತಿಲ್ಲ. ನೀವು ನಂಬಿಕೆ
ಯಲ್ಲಿ ದೃಢವಾಗಿದ್ದೀರಿ. ಆದರೆ ನಾವು ನಿಮ್ಮ ಸಂತೋಷಕ್ಕಾಗಿ
ನಿಮ್ಮ ಜೊತೆ ಕೆಲಸದವರಾಗಿದ್ದೇವೆ.

2 ಆದ್ದರಿಂದ ನಾನು ನಿಮಗೆ ನೀಡಲಿರುವ ಮುಂದಿನ
ಸಂದರ್ಶನವು ನಿಮಗೆ ದುಃಖವನ್ನು ಉಂಟುಮಾಡುವ
ಸಂದರ್ಶನವಾಗಿರಬಾರದೆಂದು ನಿರ್ಧರಿಸಿದೆನು. 2ನಾನು
ನಿಮ್ಮನ್ನು ದುಃಖಗೊಳಿಸಿದರೆ, ನನ್ನನ್ನು ಸಂತೋಷಗೊಳಿಸು
ವವರು ಯಾರು? ನನ್ನಿಂದ ದುಃಖಿತರಾದ ನೀವು ಮಾತ್ರ
ನನ್ನನ್ನು ಸಂತೋಷಪಡಿಸಬಲ್ಲಿರಿ. 3ನಾನು ನಿಮ್ಮ ಬಳಿಗೆ
ಬಂದಾಗ, ನನ್ನನ್ನು ಸಂತೋಷಗೊಳಿಸಬೇಕಾದ ಜನರಿಂದಲೇ
ನನಗೆ ದುಃಖವಾಗಬಾರದೆಂಬ ಉದ್ದೇಶದಿಂದ ನಾನು ನಿಮಗೆ
ಈ ಪತ್ರವನ್ನು ಬರೆದೆನು. ನೀವೆಲ್ಲರೂ ನನ್ನ ಆನಂದದಲ್ಲಿ ಪಾಲು
ಗಾರರಾಗುತ್ತೀರಿ ಎಂಬ ಭರವಸೆ ನನಗಿತ್ತು. 4ನಾನು ಮೊದ
ಲೊಮ್ಮೆ ನಿಮಗೆ ಬರೆದಾಗ, ನನ್ನ ಹೃದಯವು ಬಹಳ ಗಲಿಬಿಲಿ
ಗೊಂಡಿತ್ತು ಮತ್ತು ದುಃಖಗೊಂಡಿತ್ತು. ನಾನು ಕಣ್ಣೀರಿಡುತ್ತಾ
ನಿಮಗೆ ಬರೆದದ್ದು ನಿಮ್ಮನ್ನು ದುಃಖಗೊಳಿಸುವುದಕ್ಕಲ್ಲ,
ನಿಮ್ಮನ್ನು ಎಷ್ಟು ಪ್ರೀತಿಸುತ್ತೇನೆಂಬುದನ್ನು ನೀವು ತಿಳಿದು
ಕೊಳ್ಳಬೇಕೆಂದಷ್ಟೇ.

### ತಪ್ಪು ಮಾಡಿದ ಆ ವ್ಯಕ್ತಿಯನ್ನು ಕ್ಷಮಿಸಿರಿ

5ನಿಮ್ಮ ಸಭೆಯ ಒಬ್ಬನು ದುಃಖವನ್ನು ಉಂಟುಮಾಡಿದ್ದು
ನನಗಲ್ಲ. ಒಂದಲ್ಲ ಒಂದು ರೀತಿಯಲ್ಲಿ ಅವನು ನಿಮ್ಮೆಲ್ಲರಿಗೂ
ದುಃಖವನ್ನು ಉಂಟುಮಾಡಿದ್ದಾನೆ. (ಅದು ತನ್ನ ವಾಸ್ತವ
ಸ್ಥಿತಿಗಿಂತ ಹೆಚ್ಚು ಕೆಟ್ಟದ್ದಾಗಿ ಕಾಣುವಂತೆ ಮಾಡಲು ನನಗೆ
ಇಷ್ಟವಿಲ್ಲ.) 6ನಿಮ್ಮ ಸಭೆಯ ಬಹುಮಂದಿ ಅವನಿಗೆ ವಿಧಿಸಿರುವ
ಶಿಕ್ಷೆಯೇ ಸಾಕಾಗಿದೆ. 7ಆದರೆ ಈಗ ನೀವು ಅವನನ್ನು ಕ್ಷಮಿಸ
ಬೇಕು ಮತ್ತು ಸಂತೈಸಬೇಕು. ಆಗ ಅವನು ಅತೀವ ದುಃಖದಿಂದ
ಸಂಪೂರ್ಣವಾಗಿ ಸೋತುಹೋಗಲು ಸಾಧ್ಯವಾಗುವುದಿಲ್ಲ.
8ಆದ್ದರಿಂದ ನೀವು ಅವನನ್ನು ಪ್ರೀತಿಸುತ್ತೀರೆಂಬುದನ್ನು ಅವನಿಗೆ
ತೋರಿಸಿಕೊಡಬೇಕೆಂದು ನಾನು ನಿಮ್ಮನ್ನು ಬೇಡಿಕೊಳ್ಳುತ್ತೇನೆ.
9ನೀವು ಎಲ್ಲಾ ವಿಷಯಗಳಲ್ಲಿ ವಿಧೇಯರಾಗಿದ್ದೀರೋ ಇಲ್ಲವೋ
ಎಂಬುದನ್ನು ಪರೀಕ್ಷಿಸಿ ತಿಳಿದುಕೊಳ್ಳಲು ನಿಮಗೆ ಬರೆದೆನು.
10ನೀವು ಒಬ್ಬ ವ್ಯಕ್ತಿಯನ್ನು ಕ್ಷಮಿಸಿದರೆ, ನಾನೂ ಆ ವ್ಯಕ್ತಿಯನ್ನು
ಕ್ಷಮಿಸುತ್ತೇನೆ. ನಾನು ಕ್ಷಮಿಸಿದ್ದನ್ನು ನಿಮಗೋಸ್ಕರವಾಗಿಯೇ
ಕ್ಷಮಿಸಿದ್ದೇನೆ. ನಾನು ಕ್ಷಮಿಸಬೇಕಾದದ್ದನ್ನೆಲ್ಲ ಕ್ಷಮಿಸಿದ್ದೇನೆ
ಮತ್ತು ಕ್ರಿಸ್ತನೇ ನನ್ನೊಂದಿಗೆ ಇದ್ದನು. 11ಸೈತಾನನು ನಮ್ಮಿಂದ
ಯಾವುದನ್ನೂ ಕಸಿದುಕೊಳ್ಳಬಾರದೆಂದು ನಾನು ಹೀಗೆ
ಮಾಡಿದೆನು. ಸೈತಾನನ ಯೋಜನೆಗಳು ಯಾವುವೆಂದು ನಮಗೆ
ಚೆನ್ನಾಗಿ ತಿಳಿದಿವೆ.

### ತ್ರೋವದಲ್ಲಿ ಪೌಲನ ಉದ್ವೇಗ

12ನಾನು ಕ್ರಿಸ್ತನ ಸುವಾರ್ತೆಯನ್ನು ತಿಳಿಸುವುದಕ್ಕಾಗಿ
ತ್ರೋವಕ್ಕೆ ಹೋದೆನು. ಪ್ರಭುವು ಅಲ್ಲಿ ನನಗೆ ಒಳ್ಳೆಯ
ಅವಕಾಶವನ್ನು ಕೊಟ್ಟನು. 13ಆದರೆ ನನ್ನ ಸಹೋದರನಾದ
ತೀತನನ್ನು ನಾನು ಅಲ್ಲಿ ಕಾಣಲಿಲ್ಲವಾದ್ದರಿಂದ ನನಗೆ
ಸಮಾಧಾನವಿರಲಿಲ್ಲ. ಆದ್ದರಿಂದ ನಾನು ಅವರನ್ನು ವಂದಿಸಿ
ಮಕೆದೋನಿಯಕ್ಕೆ ಹೊರಟೆನು.

### ಕ್ರಿಸ್ತನ ಮೂಲಕ ವಿಜಯ

14ದೇವರಿಗೆ ಸ್ತೋತ್ರವಾಗಲಿ. ದೇವರು ನಮ್ಮನ್ನು ಕ್ರಿಸ್ತನ
ಮೂಲಕ ಯಾವಾಗಲೂ ವಿಜಯೋತ್ಸವದತ್ತ ನಡೆಸುತ್ತಿದ್ದಾನೆ.
ದೇವರು ತನ್ನ ಜ್ಞಾನವೆಂಬ ಪರಿಮಳವನ್ನು ಎಲ್ಲಾ ಕಡೆ
ಗಳಲ್ಲಿಯೂ ಹರಡಲು ನಮ್ಮನ್ನು ಉಪಯೋಗಿಸುತ್ತಿದ್ದಾನೆ.
15ರಕ್ಷಣಾಮಾರ್ಗದಲ್ಲಿರುವವರ ಮತ್ತು ನಾಶನಮಾರ್ಗದಲ್ಲಿ
ರುವವರ ಮಧ್ಯದಲ್ಲಿ ನಾವು ಕ್ರಿಸ್ತನ ಪರಿಮಳವಾಗಿದ್ದೇವೆ.
ದೇವರಿಗೆ ಇದೇ ನಮ್ಮ ಕಾಣಿಕೆ. 16ನಾಶನಮಾರ್ಗದಲ್ಲಿರುವ
ಜನರಿಗೆ ಮರಣವನ್ನು ಉಂಟುಮಾಡುವ ಮರಣದ ವಾಸನೆ
ಯಾಗಿದ್ದೇವೆ. ಆದರೆ ರಕ್ಷಣಾಮಾರ್ಗದಲ್ಲಿರುವ ಜನರಿಗೆ ಜೀವ
ವನ್ನು ಉಂಟುಮಾಡುವ ಜೀವದ ವಾಸನೆಯಾಗಿದ್ದೇವೆ. ಹೀಗಿರ
ಲಾಗಿ, ಈ ಕಾರ್ಯವನ್ನು ಮಾಡಲು ಯಾರು ಯೋಗ್ಯರಾಗಿ
ದ್ದಾರೆ? 17ಇತರ ಅನೇಕರು ಮಾಡುವಂತೆ ನಾವು ದೇವರ ವಾಕ್ಯ
ವನ್ನು ಕಲಬೆರಕೆ ಮಾಡುವುದಿಲ್ಲ. ಆದರೆ ಕ್ರಿಸ್ತನಲ್ಲಿದ್ದುಕೊಂಡು
ದೇವರ ಸನ್ನಿಧಾನದಲ್ಲಿ ಸತ್ಯವನ್ನು ಹೇಳುತ್ತೇವೆ. ದೇವರಿಂದ
ಕಳುಹಿಸಲ್ಪಟ್ಟ ಜನರಂತೆ ನಾವು ಮಾತಾಡುತ್ತೇವೆ.

### ದೇವರ ಸೇವಕರ ಹೊಸ ಒಪ್ಪಂದ

3 ನಾವು ನಮ್ಮ ವಿಷಯವಾಗಿ ಮತ್ತೆ ಹೊಗಳಿಕೊಳ್ಳಲು
ಆರಂಭಿಸಿದ್ದೇವೆಯೇ? ಇತರ ಕೆಲವು ಜನರಿಗೆ ಬೇಕಾಗು
ವಂತೆ ನಿಮ್ಮ ಬಳಿಗೆ ಬರಲು ನಮಗೆ ಯೋಗ್ಯತಾಪತ್ರಗಳನ್ನು
ತೆಗೆದುಕೊಳ್ಳಬೇಕಾಗಿದೆಯೋ? ಅಥವಾ ಬೇರೆಡೆಗೆ ಹೋಗು
ವಾಗ ನಿಮ್ಮಿಂದ ಯೋಗ್ಯತಾಪತ್ರಗಳನ್ನು ತೆಗೆದುಕೊಳ್ಳ
ಬೇಕಾಗಿದೆಯೋ? 2ಸ್ವತಃ ನೀವೇ ನಮಗೆ ಯೋಗ್ಯತಾಪತ್ರ
ವಾಗಿದ್ದೀರಿ. ಆ ಪತ್ರಗಳು ನಮ್ಮ ಹೃದಯಗಳಲ್ಲಿ ಬರೆಯ
ಲ್ಪಟ್ಟಿವೆ. ಆ ಪತ್ರವನ್ನು ಎಲ್ಲರೂ ಬಲ್ಲರು, ಎಲ್ಲರೂ ಓದುತ್ತಾರೆ.
3ಕ್ರಿಸ್ತನು ನಮ್ಮ ಮೂಲಕವಾಗಿ ಕಳುಹಿಸಿದ ಕ್ರಿಸ್ತನ ಪತ್ರ

ನೀವಾಗಿದ್ದೀರಿ. ಆ ಪತ್ರವನ್ನು ಬರೆದಿರುವುದು ಶಾಯಿ
ಯಿಂದಲ್ಲ, ಜೀವಸ್ವರೂಪನಾದ ದೇವರ ಆತ್ಮನಿಂದ. ಇದನ್ನು
ಕಲ್ಲುಹಲಿಗೆಗಳ ಮೇಲೆ ಬರೆದಿಲ್ಲ. ಇದನ್ನು ಮಾನವ ಹೃದಯ
ಗಳ ಮೇಲೆ ಬರೆಯಲಾಗಿದೆ. 4ನಾವು ಈ ಸಂಗತಿಗಳನ್ನು
ಹೇಳಬಲ್ಲೆವು; ಏಕೆಂದರೆ ನಾವು ಕ್ರಿಸ್ತನ ಮೂಲಕ ದೇವರ
ಸನ್ನಿಧಿಯಲ್ಲಿ ಭರವಸದಿಂದಿದ್ದೇವೆ. 5ನಮ್ಮ ಸ್ವಂತ ಶಕ್ತಿ
ಯಿಂದಲೇ ನಾವು ಯಾವ ಒಳ್ಳೆಯದನ್ನಾದರೂ ಮಾಡಬಲ್ಲೆ
ವೆಂದು ನಾನು ಹೇಳುತ್ತಿಲ್ಲ. ನಾವು ಮಾಡುವ ಕಾರ್ಯಗಳನ್ನು
ದೇವರು ಒದಗಿಸಿದ ಸಾಮರ್ಥ್ಯದಿಂದಲೇ ಮಾಡುತ್ತೇವೆ.
6ದೇವರು ತನ್ನ ಜನರೊಂದಿಗೆ ಮಾಡಿಕೊಂಡ ಹೊಸ
ಒಡಂಬಡಿಕೆಗೆ ಸೇವಕರಾಗಿರುವ ಸಾಮರ್ಥ್ಯವನ್ನು ದೇವರೇ
ನಮಗೆ ಕೊಟ್ಟನು. ಈ ಹೊಸ ಒಡಂಬಡಿಕೆಯು ಲಿಖಿತ
ರೂಪವಾದ ಧರ್ಮಶಾಸ್ತ್ರವಲ್ಲ. ಇದು ಪವಿತ್ರಾತ್ಮನದು. ಲಿಖಿತ
ರೂಪವಾದ ಧರ್ಮಶಾಸ್ತ್ರವು ಮರಣವನ್ನು ತರುತ್ತದೆ, ಆದರೆ
ಪವಿತ್ರಾತ್ಮನು ಜೀವವನ್ನು ಕೊಡುತ್ತಾನೆ.

## ಹೊಸ ಒಡಂಬಡಿಕೆಯು ಹೆಚ್ಚಿನ ಮಹಿಮೆಯನ್ನು ತರುತ್ತದೆ

7ಮರಣವನ್ನು ವಿಧಿಸುವ ಸೇವೆಯು (ಧರ್ಮಶಾಸ್ತ್ರ) ಕಲ್ಲಿನ
ಹಲಗೆಗಳ ಮೇಲೆ ಅಕ್ಷರಗಳಲ್ಲಿ ಬರೆಯಲ್ಪಟ್ಟಿತ್ತು. ಅದು ದೇವರ
ಮಹಿಮೆಯೊಂದಿಗೆ ಬಂದಿತು. ಮೋಶೆಯ ಮುಖವು ಪ್ರಕಾಶ
ಮಾನವಾಗಿ ಹೊಳೆಯುತ್ತಿದ್ದುದರಿಂದ ಇಸ್ರೇಲರು ಅವನ
ಮುಖವನ್ನು ನೋಡಲಾರದೆ ಹೋದರು. ಆ ಬಳಿಕ ಆ
ಮಹಿಮೆಯು ಕುಂದಿಹೋಯಿತು. 8ಹೀಗಿರಲಾಗಿ ಪವಿತ್ರಾತ್ಮನ
ಸಂಬಂಧವಾದ ಸೇವೆಯು ಇನ್ನೂ ಹೆಚ್ಚಿನ ಮಹಿಮೆಯನ್ನು
ಹೊಂದಿದೆ. 9ಇದರರ್ಥವೇನೆಂದರೆ: ಆ ಸೇವೆಯು (ಧರ್ಮ
ಶಾಸ್ತ್ರ) ಜನರನ್ನು ಅಪರಾಧಿಗಳೆಂದು ತೀರ್ಪು ನೀಡಿತು, ಆದರೆ
ಅದು ಮಹಿಮೆಯನ್ನು ಹೊಂದಿತ್ತು. ಹೀಗಿರಲಾಗಿ, ನೀತಿಗೆ
ಸಾಧನವಾಗಿರುವ ಸೇವೆಯು ಇನ್ನೂ ಹೆಚ್ಚಿನ ಮಹಿಮೆಯನ್ನು
ಉಂಟುಮಾಡುವುದು ಎಷ್ಟೋ ನಿಶ್ಚಯವಾಗಿದೆ. 10ಆ ಹಳೆ
ಸೇವೆಯು ಮಹಿಮೆಯನ್ನು ಹೊಂದಿತ್ತು. ಆದರೆ ಅದು ಹೊಸ
ಸೇವೆಯ ಎದುರಿನಲ್ಲಿ ಮಹಿಮೆಯಿಲ್ಲದ್ದಾಯಿತು. 11ಲಯ
ಗೊಂಡ ಆ ಸೇವೆಯು ಮಹಿಮೆಯೊಂದಿಗೆ ಬಂದಿರುವು
ದಾಗಿದ್ದರೆ, ಎಂದೆಂದಿಗೂ ಮುಂದುವರಿಯುವ ಈ ಸೇವೆಯು
ಇನ್ನೂ ಹೆಚ್ಚಿನ ಮಹಿಮೆಯನ್ನು ಹೊಂದಿದೆ. 12ನಮಗೆ ಈ
ನಿರೀಕ್ಷೆ ಇರುವುದರಿಂದ ನಾವು ಬಹಳ ಧೈರ್ಯವಾಗಿದ್ದೇವೆ.
13ನಾವು ಮೋಶೆಯಂತಿಲ್ಲ. ಕುಂದಿಹೋಗುವ ಮಹಿಮೆಯು
ಅಂತ್ಯಗೊಳ್ಳುವುದನ್ನು ಇಸ್ರೇಲರು ಕಾಣದಂತೆ ಮೋಶೆಯು ತನ್ನ
ಮುಖಕ್ಕೆ ಮುಸುಕು ಹಾಕಿಕೊಂಡನು. 14ಆದರೆ ಅವರ ಬುದ್ಧಿಗೆ
ಮಂಕು ಕವಿದಿದ್ದರಿಂದ ಅವರು ಅರ್ಥಮಾಡಿಕೊಳ್ಳಲಾಗಲಿಲ್ಲ.
ಅವರು ಹಳೆ ಒಡಂಬಡಿಕೆಯನ್ನು ಓದುವಾಗ ಇಂದಿಗೂ ಅದೇ
ಮುಸುಕು ಅರ್ಥವನ್ನು ಮರೆಮಾಡುತ್ತದೆ. ಆ ಮುಸುಕನ್ನು
ತೆಗೆದು ಹಾಕಲಿಲ್ಲ. ಏಕೆಂದರೆ ಕ್ರಿಸ್ತನ ಮೂಲಕವಾಗಿ ಮಾತ್ರ
ಅದು ತೆಗೆದುಹಾಕಲ್ಪಟ್ಟಿತು. 15ಆದರೆ ಇಂದಿಗೂ ಸಹ,
ಮೋಶೆಯ ಧರ್ಮಶಾಸ್ತ್ರವನ್ನು ಓದುವಾಗ, ಅವರ ಮನಸ್ಸುಗಳ
ಮೇಲೆ ಮುಸುಕು ಇರುತ್ತದೆ. 16ಆದರೆ ಒಬ್ಬ ವ್ಯಕ್ತಿಯು
ಮಾರ್ಪಾಟಾಗಿ ಪ್ರಭುವನ್ನು ಅನುಸರಿಸುವಾಗ ಆ ಮುಸುಕು
ತೆಗೆಯಲ್ಪಡುವುದು. 17ಆ ಪ್ರಭುವು ಪವಿತ್ರಾತ್ಮನೇ. ಎಲ್ಲಿ
ಪ್ರಭುವಿನ ಆತ್ಮನು ಇರುತ್ತಾನೊ ಅಲ್ಲಿ ಸ್ವತಂತ್ರವಿರುತ್ತದೆ.
18ನಮ್ಮ ಮುಖಗಳು ಮುಸುಕಿನಿಂದ ಮುಚ್ಚಲ್ಪಟ್ಟಿಲ್ಲ.
ನಾವೆಲ್ಲರೂ ಮುಸುಕು ತೆರೆದ ಮುಖವುಳ್ಳವರಾಗಿದ್ದು ಪ್ರಭು
ವಿನ ಮಹಿಮೆಯನ್ನು ಪ್ರತಿಬಿಂಬಿಸುವ ಕನ್ನಡಿಯಂತಿದ್ದೇವೆ.
ಪ್ರಭುವಿನಿಂದ ಹೊರಹೊಮ್ಮುವ ಮಹಿಮೆಯು ನಮ್ಮನ್ನು
ಅಧಿಕಾಧಿಕವಾಗಿ ಮಾರ್ಪಡಿಸಿ ಆತನನ್ನೇ ಹೋಲುವಂತೆ
ಮಾಡುತ್ತದೆ. ಇದೆಲ್ಲಾ ದೇವರಾತ್ಮನಾಗಿರುವ ಪ್ರಭುವಿನ
ಕಾರ್ಯವೇ.

## ಮಡಕೆಗಳಲ್ಲಿರುವ ಆತ್ಮಿಕ ಭಂಡಾರ

4 ದೇವರು ತನ್ನ ಕೃಪೆಯಿಂದ ಈ ಸೇವೆಯನ್ನು ನಮಗೆ
ಒಪ್ಪಿಸಿದ್ದಾನೆ. ಆದ್ದರಿಂದ ನಾವು ಧೈರ್ಯಗೆಡುವುದಿಲ್ಲ.
2ರಹಸ್ಯವಾದ ಮತ್ತು ನಾಚಿಕೆಕರವಾದ ಮಾರ್ಗಗಳಿಗೆ ನಾವು
ವಿಮುಖರಾಗಿದ್ದೇವೆ. ನಾವು ಕುತಂತ್ರವನ್ನು ಉಪಯೋಗಿಸು
ವುದೂ ಇಲ್ಲ, ದೇವರ ಉಪದೇಶವನ್ನು ಬದಲಾಯಿಸುವುದೂ
ಇಲ್ಲ. ನಾವು ಸತ್ಯವನ್ನು ಸ್ಪಷ್ಟವಾಗಿ ಬೋಧಿಸುತ್ತೇವೆ. ನಾವು
ಯಾರೆಂಬುದನ್ನು ಜನರಿಗೆ ಈ ರೀತಿ ತೋರಿಸಿಕೊಡುತ್ತೇವೆ.
ಹೀಗೆ ನಾವು ದೇವರ ಸಮ್ಮುಖದಲ್ಲಿ ಎಂಥಾ ಜನರಾಗಿದ್ದೇವೆ
ಎಂಬುದನ್ನು ಅವರು ತಮ್ಮ ಹೃದಯಗಳಲ್ಲಿ ತಿಳಿದುಕೊಳ್ಳ
ಬಲ್ಲರು. 3ನಾವು ಬೋಧಿಸುವ ಸುವಾರ್ತೆಯು ಮರೆಯಾಗಿರ
ಬಹುದು. ಆದರೆ ನಾಶನದ ಮಾರ್ಗದಲ್ಲಿರುವವರಿಗೆ ಮಾತ್ರ
ಅದು ಮರೆಯಾಗಿದೆ. 4ಈ ಲೋಕದ ಅಧಿಪತಿಯು* (ಸೈತಾ
ನನು) ನಂಬದವರ ಮನಸ್ಸುಗಳನ್ನು ಕುರುಡುಗೊಳಿಸಿದ್ದಾನೆ.
ಕ್ರಿಸ್ತನ ಮಹಿಮೆಯ ವಿಷಯವಾದ ಸುವಾರ್ತೆಯ ಬೆಳಕನ್ನು
(ಸತ್ಯವನ್ನು) ಅವರು ಕಾಣಲಾರರು. ಕ್ರಿಸ್ತನೊಬ್ಬನೇ ದೇವರಿಗೆ
ಪ್ರತಿರೂಪವಾಗಿದ್ದಾನೆ. 5ನಾವು ನಮ್ಮ ಬಗ್ಗೆ ಬೋಧಿಸುವುದಿಲ್ಲ.
ಆದರೆ ಯೇಸು ಕ್ರಿಸ್ತನೇ ಪ್ರಭುವೆಂದು ಮತ್ತು ಯೇಸುವಿ
ಗೋಸ್ಕರ ನಿಮ್ಮ ಸೇವಕರಾಗಿದ್ದೇವೆಂದು ಬೋಧಿಸುತ್ತೇವೆ.
6“ಬೆಳಕು ಕತ್ತಲೆಯೊಳಗಿಂದ ಪ್ರಕಾಶಿಸಲಿ!” ಎಂದು ದೇವರು
ಒಮ್ಮೆ ಹೇಳಿದ್ದಾನೆ. ಈ ದೇವರೇ ನಮ್ಮ ಹೃದಯಗಳಲ್ಲಿ ತನ್ನ
ಬೆಳಕನ್ನು ಬೆಳಗಿಸಿದ್ದಾನೆ. ಕ್ರಿಸ್ತನ ಮುಖದಲ್ಲಿರುವ ದೇವರ
ಮಹಿಮೆಯನ್ನು ನಮಗೆ ತಿಳಿಯಪಡಿಸುವುದರ ಮೂಲಕ
ಆತನು ನಮಗೆ ಬೆಳಕನ್ನು ಕೊಟ್ಟಿದ್ದಾನೆ. 7ನಮಗೆ ಈ ನಿಕ್ಷೇಪವು
ದೇವರಿಂದ ದೊರೆತಿದೆ. ನಾವಾದರೊ ನಿಕ್ಷೇಪವನ್ನು ತುಂಬಿ
ಕೊಂಡಿರುವ ಕೇವಲ ಮಡಕೆಗಳಂತಿದ್ದೇವೆ. ಈ ಮಹಾಶಕ್ತಿಯು
ಬಂದದ್ದು ದೇವರಿಂದಲೇ ಹೊರತು ನಮ್ಮಿಂದಲ್ಲವೆಂಬುದನ್ನು
ಇದು ತೋರಿಸುತ್ತದೆ. 8ನಮ್ಮ ಸುತ್ತಮುತ್ತಲೆಲ್ಲಾ ಇಕ್ಕಟ್ಟುಗಳಿವೆ,
ಆದರೆ ಸೋತುಹೋಗಿಲ್ಲ. ಅನೇಕಸಲ, ಏನು ಮಾಡಬೇಕೊ
ನಮಗೆ ತಿಳಿಯದು, ಆದರೂ ನಾವು ಧೈರ್ಯಗೆಡುವುದಿಲ್ಲ.
9ನಾವು ಹಿಂಸೆಗೆ ಗುರಿಯಾದೆವು, ಆದರೆ ದೇವರು ನಮ್ಮನ್ನು
ತೊರೆದುಬಿಡಲಿಲ್ಲ. ಕೆಲವು ಸಲ ನಮಗೆ ನೋವಾಯಿತು,
ಆದರೂ ನಾಶವಾಗಲಿಲ್ಲ. 10ನಮ್ಮ ದೇಹಗಳಲ್ಲಿ ಯೇಸುವಿನ
ಜೀವವು ತೋರಿಬರಲೆಂದು ಆತನ ಮರಣಾವಸ್ಥೆಯನ್ನು
ಅನುಭವಿಸುತ್ತಿದ್ದೇವೆ. 11ನಾವು ಜೀವಂತವಾಗಿದ್ದರೂ ಯೇಸು
ವಿಗೋಸ್ಕರ ಯಾವಾಗಲೂ ಮರಣದ ಅಪಾಯದಲ್ಲಿದ್ದೇವೆ.
ಸತ್ತುಹೋಗುವ ನಮ್ಮ ದೇಹಗಳಲ್ಲಿ ಆತನ ಜೀವವು

**ಅಧಿಪತಿ** ಅಕ್ಷರಶಃ “ದೇವರು.”

ಕಾಣಬರಲೆಂದು ಇದು ನಮಗೆ ಸಂಭವಿಸುತ್ತದೆ. 12ಆದ್ದರಿಂದ
ಮರಣವು ನಮ್ಮಲ್ಲಿ ಕಾರ್ಯಮಾಡುತ್ತಿದೆ, ಆದರೆ ನಿಮ್ಮಲ್ಲಿ
ಜೀವವು ಕಾರ್ಯಮಾಡುತ್ತಿದೆ. 13‘‘ನಾನು ನಂಬಿದ್ದರಿಂದಲೇ
ಮಾತಾಡಿದೆನು.’’ ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ. ನಮ್ಮ
ನಂಬಿಕೆಯು ಸಹ ಅದೇ ರೀತಿಯಲ್ಲಿದೆ. ನಾವು ನಂಬುವುದ
ರಿಂದಲೇ ಮಾತಾಡುತ್ತೇವೆ. 14ಪ್ರಭುವಾದ ಯೇಸುವನ್ನು ಸತ್ತ
ವರೊಳಗಿಂದ ಎಬ್ಬಿಸಿದ ದೇವರು ನಮ್ಮನ್ನು ಸಹ ಕ್ರಿಸ್ತನೊಂದಿಗೆ
ಎಬ್ಬಿಸುತ್ತಾನೆ ಎಂಬುದು ನಮಗೆ ಗೊತ್ತಿದೆ. ದೇವರು ನಮ್ಮನ್ನು
ನಿಮ್ಮ ಜೊತೆಯಲ್ಲಿ ತನ್ನ ಮುಂದೆ ನಿಲ್ಲಿಸುವನು. 15ಇವುಗಳೆಲ್ಲ
ನಿಮಗೋಸ್ಕರವಾಗಿಯೇ. ಹೀಗೆ ದೇವರ ಕೃಪೆಯು ಹೆಚ್ಚುಹೆಚ್ಚು
ಜನರಿಗೆ ಕೊಡಲ್ಪಡುವುದು. ಇದರಿಂದಾಗಿ, ಹೆಚ್ಚುಹೆಚ್ಚು ಜನರು
ದೇವರ ಮಹಿಮೆಗಾಗಿ ಕೃತಜ್ಞತಾಸುತ್ತಿ ಸಲ್ಲಿಸುವರು.

## ನಂಬಿಕೆಯ ಜೀವನ

16ಆದಕಾರಣವೇ, ನಾವೆಂದಿಗೂ ಬಲಹೀನರಾಗುವುದಿಲ್ಲ.
ನಮ್ಮ ಭೌತಿಕ ದೇಹಕ್ಕೆ ವಯಸ್ಸಾಗುತ್ತಿದೆ ಮತ್ತು ಅದು ಬಲಹೀನ
ವಾಗುತ್ತಿದೆ. ಆದರೆ ನಮ್ಮ ಅಂತರ್ಯವು ಪ್ರತಿದಿನ ಹೊಸ
ದಾಗುತ್ತಿದೆ. 17ಸ್ವಲ್ಪ ಕಾಲದವರೆಗೆ ನಮಗೆ ಚಿಕ್ಕಪುಟ್ಟ ಇಕ್ಕಟ್ಟು
ಗಳಿರುತ್ತವೆ, ಆದರೆ ನಿತ್ಯವಾದ ಮಹಿಮೆಯನ್ನು ಹೊಂದಿ
ಕೊಳ್ಳಲು ಅವು ನಮಗೆ ಸಹಾಯಕವಾಗಿವೆ. ಆ ಮಹಿಮೆಯು
ಇಂದಿನ ಇಕ್ಕಟ್ಟುಗಳಿಗಿಂತಲೂ ಮಹತ್ವವುಳ್ಳದ್ದಾಗಿದೆ. 18ಆದ್ದ
ರಿಂದ ನಮಗೆ ಕಾಣುವಂಥವುಗಳ ಬಗ್ಗೆ ಯೋಚಿಸದೆ ನಮಗೆ
ಕಾಣದಿರುವಂಥವುಗಳ ಬಗ್ಗೆ ಯೋಚಿಸುತ್ತೇವೆ. ನಮಗೆ ಕಾಣು
ವಂಥವುಗಳು ಕೇವಲ ಸ್ವಲ್ಪಕಾಲ ಮಾತ್ರ ಇರುತ್ತವೆ.ಆದರೆ
ನಮಗೆ ಕಾಣದಂಥವುಗಳು ಎಂದೆಂದಿಗೂ ಇರುತ್ತವೆ.

5 ಭೂಮಿಯ ಮೇಲೆ ನಾವು ವಾಸವಾಗಿರುವ ಈ ಗುಡಾರವು
ಅಂದರೆ ಈ ದೇಹವು ನಾಶವಾಗುವುದೆಂದು ನಮಗೆ
ಗೊತ್ತಿದೆ. ಆದರೆ ಅದು ಸಂಭವಿಸಿದಾಗ, ನಮ್ಮ ವಾಸಕ್ಕಾಗಿ
ದೇವರು ನಮಗೊಂದು ಮನೆಯನ್ನು ಕೊಡುವನು. ಅದು
ಮನುಷ್ಯರಿಂದ ನಿರ್ಮಿತವಾದ ಮನೆಯಲ್ಲ. ಅದು ಪರಲೋಕ
ದಲ್ಲಿರುವ ಶಾಶ್ವತವಾದ ಮನೆಯಾಗಿದೆ. 2ಆದರೆ ಈಗ ನಾವು
ಈ ದೇಹದಲ್ಲಿ ಬಳಲಿಹೋಗಿದ್ದೇವೆ. ಪರಲೋಕದಲ್ಲಿರುವ
ನಮ್ಮ ಮನೆಯನ್ನು ದೇವರು ನಮಗೆ ಯಾವಾಗ ಕೊಡುವನೊ
ಎಂದು ಹಾತೊರೆಯುತ್ತೇವೆ. 3ನಾವು ಅದನ್ನು ಧರಿಸಿಕೊಂಡಾಗ
ಬೆತ್ತಲೆಯಾಗಿರುವುದಿಲ್ಲ. 4ಈ ಗುಡಾರದಲ್ಲಿರುವ ತನಕ ನಮಗೆ
ಭಾರವಾದ ಹೊರೆಗಳಿವೆ ಮತ್ತು ದೂರು ಹೇಳುತ್ತೇವೆ. ಬೆತ್ತಲೆ
ಯಾಗಿರಲು ನಾವು ಇಷ್ಟಪಡದೆ ಪರಲೋಕದ ಮನೆಯನ್ನು
ಧರಿಸಿಕೊಳ್ಳಲು ಇಷ್ಟಪಡುತ್ತೇವೆ. ಸತ್ತುಹೋಗುವ ಈ
ದೇಹವನ್ನು ಜೀವವು ಪೂರ್ಣವಾಗಿ ಆವರಿಸಿಕೊಳ್ಳುವುದು.
5ಇದಕ್ಕೋಸ್ಕರವಾಗಿಯೇ ದೇವರು ನಮ್ಮನ್ನು ಸಿದ್ಧಗೊಳಿ
ಸಿದ್ದಾನೆ ಮತ್ತು ಇದನ್ನು ಖಚಿತಪಡಿಸಲು ಪವಿತ್ರಾತ್ಮನನ್ನೇ ನಮಗೆ
ಅನುಗ್ರಹಿಸಿದ್ದಾನೆ. 6ಆದ್ದರಿಂದ ಯಾವಾಗಲೂ ಧೈರ್ಯ
ದಿಂದಿದ್ದೇವೆ. ಈ ದೇಹದಲ್ಲಿ ವಾಸವಾಗಿರುವ ತನಕ ಪ್ರಭುವಿ
ನಿಂದ ದೂರವಾಗಿರುತ್ತೇವೆಂಬುದು ನಮಗೆ ತಿಳಿದಿದೆ. 7ನಾವು
ಯಾವುದನ್ನು ನೋಡುತ್ತಿದ್ದೇವೊ ಅದರಿಂದ ಜೀವಿಸುತ್ತಿಲ್ಲ.
ಆದರೆ ಯಾವುದನ್ನು ನಂಬಿದ್ದೇವೊ ಅದರಿಂದ ಜೀವಿಸು
ತ್ತಿದ್ದೇವೆ. 8ಆದ್ದರಿಂದ ನಾವು ಧೈರ್ಯವುಳ್ಳವರಾಗಿದ್ದು ದೇಹ
ವನ್ನು ಬಿಟ್ಟು ಪ್ರಭುವಿನೊಂದಿಗೆ ವಾಸಿಸುವುದನ್ನೇ ನಿಜ
ವಾಗಿಯೂ ಅಪೇಕ್ಷಿಸುತ್ತೇವೆ. 9ದೇವರನ್ನು ಮೆಚ್ಚಿಸಬೇಕೆಂಬು
ದೊಂದೇ ನಮಗಿರುವ ಉದ್ದೇಶವಾಗಿದೆ. ನಾವು ನಮ್ಮ
ದೇಹದಲ್ಲಿ ಇಲ್ಲಿ ವಾಸವಾಗಿರುವಾಗಲೂ ಪ್ರಭುವಿನೊಂದಿಗೆ
ಅಲ್ಲಿ ವಾಸವಾಗಿರುವಾಗಲೂ ಆತನನ್ನು ಮೆಚ್ಚಿಸಬೇಕೆಂಬು
ದೊಂದೇ ನಮ್ಮ ಬಯಕೆಯಾಗಿದೆ. 10ನಾವೆಲ್ಲರೂ ನ್ಯಾಯ
ವಿಚಾರಣೆಗಾಗಿ ಕ್ರಿಸ್ತನ ಮುಂದೆ ನಿಂತುಕೊಳ್ಳಲೇಬೇಕು. ಪ್ರತಿ
ಯೊಬ್ಬನು ಇಹಲೋಕದ ದೇಹದಲ್ಲಿ ವಾಸವಾಗಿದ್ದಾಗ
ಮಾಡಿದ ಒಳ್ಳೆಯದಕ್ಕಾಗಲಿ ಕೆಟ್ಟದಕ್ಕಾಗಲಿ ಪ್ರತಿಫಲವನ್ನು
ಹೊಂದುವನು.

## ಜನರನ್ನು ದೇವರ ಸ್ನೇಹಿತರನ್ನಾಗಿಸಲು ಮಾಡತಕ್ಕ ಸಹಾಯ

11ಪ್ರಭುವಿನ ಭಯ ಎಂದರೇನೆಂಬುದು ನಮಗೆ ತಿಳಿದಿದೆ.
ಆದ್ದರಿಂದ ಸತ್ಯವನ್ನು ಸ್ವೀಕರಿಸಿಕೊಳ್ಳುವಂತೆ ಜನರಿಗೆ ಸಹಾಯ
ಮಾಡಲು ನಾವು ಪ್ರಯತ್ನಿಸುತ್ತೇವೆ. ನಾವು ಎಂಥವರೆಂದು
ದೇವರು ಚೆನ್ನಾಗಿ ಬಲ್ಲನು. ನೀವು ಸಹ ನಿಮ್ಮ ಹೃದಯಗಳಲ್ಲಿ
ನಮ್ಮನ್ನು ತಿಳಿದುಕೊಂಡಿದ್ದೀರೆಂದು ನಂಬುತ್ತೇವೆ. 12ನಾವು
ನಮ್ಮನ್ನು ನಿಮ್ಮ ಮುಂದೆ ಮತ್ತೊಮ್ಮೆ ನಿರೂಪಿಸಿಕೊಳ್ಳುತ್ತಿಲ್ಲ.
ಆದರೆ ನಮ್ಮ ಬಗ್ಗೆ ನಿಮಗೆ ಹೇಳುತ್ತಿದ್ದೇವೆಯಷ್ಟೇ. ನೀವು ನಮ್ಮ
ವಿಷಯದಲ್ಲಿ ಹೆಮ್ಮೆಪಡುವುದಕ್ಕೆ ನಿಮಗೆ ಕಾರಣಗಳನ್ನು ಕೊಡು
ತ್ತಿದ್ದೇವೆ. ಆಗ, ಕಣ್ಣಿಗೆ ಕಾಣುವ ಸಂಗತಿಗಳ ಬಗ್ಗೆ ಹೆಮ್ಮೆಪಡುವ
ಜನರಿಗೆ ಕೊಡತಕ್ಕ ಉತ್ತರವು ನಿಮ್ಮಲ್ಲಿರುವುದು. ಆ ಜನರು
ಒಬ್ಬ ವ್ಯಕ್ತಿಯ ಹೃದಯದ ಸ್ಥಿತಿಯ ಬಗ್ಗೆ ಚಿಂತಿಸುವುದಿಲ್ಲ.
13ನಾವು ಹುಚ್ಚರಾಗಿದ್ದರೆ ಅದು ದೇವರಿಗೋಸ್ಕರವಾಗಿಯೇ.
ನಮಗೆ ಸ್ವಸ್ಥಬುದ್ಧಿಯಿದ್ದರೆ ಅದು ನಿಮಗೋಸ್ಕರವಾಗಿಯೇ.
14ಕ್ರಿಸ್ತನ ಪ್ರೀತಿಯು ನಮ್ಮನ್ನು ಒತ್ತಾಯಿಸುತ್ತದೆ. ಏಕೆಂದರೆ,
ಎಲ್ಲಾ ಜನರಿಗೋಸ್ಕರವಾಗಿ ಆತನು ಸತ್ತನೆಂಬುದು ನಮಗೆ
ಗೊತ್ತಿದೆ. ಆದ್ದರಿಂದ ಎಲ್ಲರೂ ಸತ್ತುಹೋದರು. 15ಜೀವಿಸು
ವವರು ಇನ್ನು ಮೇಲೆ ತಮಗೋಸ್ಕರ ಜೀವಿಸಬಾರದೆಂದು
ಕ್ರಿಸ್ತನು ಎಲ್ಲಾ ಜನರಿಗಾಗಿ ಸತ್ತನು. ಆ ಜನರು ತನಗೋಸ್ಕರ
ಜೀವಿಸಲೆಂದು ಆತನು ಅವರಿಗೋಸ್ಕರ ಸತ್ತನು ಮತ್ತು ಸತ್ತವ
ರೊಳಗಿಂದ ಜೀವಂತವಾಗಿ ಎದ್ದುಬಂದನು. 16ಹೀಗಿರಲಾಗಿ,
ಲೋಕವು ಜನರ ವಿಷಯವಾಗಿ ಯೋಚಿಸುವಂತೆ ಇಂದಿನಿಂದ
ನಾವು ಯಾರ ಬಗ್ಗೆಯೂ ಯೋಚಿಸುವುದಿಲ್ಲ. ಲೋಕವು
ಯೋಚಿಸುವಂತೆ ಹಿಂದಿನ ಕಾಲದಲ್ಲಿ ನಾವು ಕ್ರಿಸ್ತನ ಬಗ್ಗೆ
ಯೋಚಿಸಿಕೊಂಡಿದ್ದೆವು. ಆದರೆ ಈಗ ನಾವು ಆ ರೀತಿಯಲ್ಲಿ
ಯೋಚಿಸುವುದಿಲ್ಲ. 17ಯಾವನಾದರೂ ಕ್ರಿಸ್ತನಲ್ಲಿದ್ದರೆ, ಅವನು
ಹೊಸ ಸೃಷ್ಟಿಯಾಗಿದ್ದಾನೆ. ಹಳೆಯ ಸಂಗತಿಗಳೆಲ್ಲಾ ಅಳಿದು
ಹೋದವು; ಪ್ರತಿಯೊಂದು ಹೊಸದಾಯಿತು. 18ಇದೆಲ್ಲಾ
ದೇವರಿಂದಲೇ ಆಯಿತು. ಕ್ರಿಸ್ತನ ಮೂಲಕವಾಗಿ ದೇವರು
ನಮ್ಮನ್ನು ತನ್ನೊಂದಿಗೆ ಸಮಾಧಾನ ಪಡಿಸಿಕೊಂಡಿದ್ದಾನೆ.
ಇದಲ್ಲದೆ ಇತರರನ್ನು ಈ ಸಮಾಧಾನಕ್ಕೆ ಕರೆದುಕೊಂಡು ಬರುವ
ಕೆಲಸವನ್ನು ದೇವರು ನಮಗೆ ಕೊಟ್ಟಿದ್ದಾನೆ. 19ಅಂದರೆ, ದೇವರು
ಕ್ರಿಸ್ತನಲ್ಲಿ ಇಡೀ ಜಗತ್ತನ್ನೇ ತನ್ನೊಂದಿಗೆ ಸಮಾಧಾನಪಡಿಸಿ
ಕೊಳ್ಳುತ್ತಿದ್ದನು. ದೇವರು ಕ್ರಿಸ್ತನಲ್ಲಿ ಜನರ ಅಪರಾಧಗಳನ್ನು
ಪರಿಗಣಿಸುವುದಿಲ್ಲ. ಈ ಸಮಾಧಾನದ ಸಂದೇಶವನ್ನು ಜನರಿಗೆ
ತಿಳಿಸುವ ಕೆಲಸವನ್ನು ದೇವರು ನಮಗೆ ಕೊಟ್ಟಿದ್ದಾನೆ. 20ಆದ್ದ

ರಿಂದ ಕ್ರಿಸ್ತನ ಪರವಾಗಿ ಮಾತಾಡಲು ನಮ್ಮನ್ನು ಕಳುಹಿಸ
ಲಾಗಿದೆ. ಇದು, ದೇವರು ನಮ್ಮ ಮೂಲಕವಾಗಿ ಜನರನ್ನು
ಕರೆಯುವಂತಿದೆ. ದೇವರೊಂದಿಗೆ ಸಮಾಧಾನವಾಗಿರಿ ಎಂದು
ನಾವು ನಿಮ್ಮನ್ನು ಬೇಡಿಕೊಳ್ಳುವಾಗ ಕ್ರಿಸ್ತನ ಪರವಾಗಿ ಮಾತಾಡು
ವವರಾಗಿದ್ದೇವೆ. 21ಕ್ರಿಸ್ತನಲ್ಲಿ ಪಾಪವಿರಲಿಲ್ಲ. ಆದರೆ ನಾವು
ದೇವರಿಗೆ ಸಮರ್ಪಕರಾದ ನೀತಿ ಸ್ವರೂಪಿಗಳಾಗುವಂತೆ
ದೇವರು ಆತನನ್ನು ಪಾಪಸ್ವರೂಪಿಯನ್ನಾಗಿ ಮಾಡಿದನು.

6 ನಾವು ದೇವರ ಜೊತೆ ಕೆಲಸದವರಾಗಿದ್ದೇವೆ. ಆದ್ದರಿಂದ
ನಿಮ್ಮನ್ನು ಬೇಡಿಕೊಳ್ಳುವುದೇನಂದರೆ, ನೀವು ದೇವರಿಂದ
ಹೊಂದಿಕೊಂಡ ಕೃಪೆಯು ವ್ಯರ್ಥವಾಗದಂತೆ ನೋಡಿಕೊಳ್ಳಿ.
2ದೇವರು ಇಂತೆನ್ನುತ್ತಾನೆ:

> ‘‘ಸುಪ್ರಸನ್ನತೆಯ ಕಾಲದಲ್ಲಿ ನಾನು ನಿನಗೆ ಕಿವಿ
> ಗೊಟ್ಟೆನು, ರಕ್ಷಣೆಯ ದಿನದಲ್ಲಿ ನಾನು ನಿನಗೆ
> ಸಹಾಯ ಮಾಡಿದೆನು.’’
>
> *ಯೆಶಾಯ 49:8*

ಇದೇ ಆ ‘‘ಸುಪ್ರಸನ್ನತೆಯ ಕಾಲ’’, ಇದೇ ಆ ‘‘ರಕ್ಷಣೆಯ
ದಿನ.’’ 3ನಮ್ಮ ಸೇವೆಯು ನಿಂದೆಗೆ ಒಳಗಾಗಬಾರದೆಂದು
ನಾವು ಯಾರಿಗೂ ತೊಂದರೆ ಮಾಡುವುದಿಲ್ಲ. 4ಆದರೆ ಪ್ರತಿ
ಯೊಂದು ವಿಷಯದಲ್ಲಿಯೂ ನಾವು ದೇವರ ಸೇವಕ
ರೆಂಬುದನ್ನು ತೋರ್ಪಡಿಸುತ್ತೇವೆ. ನಾವು ಸಂಕಟಗಳಲ್ಲಿಯೂ
ಕೊರತೆಗಳಲ್ಲಿಯೂ ಇಕ್ಕಟ್ಟುಗಳಲ್ಲಿಯೂ 5ಪೆಟ್ಟುಗಳಲ್ಲಿಯೂ
ಸೆರೆಮನೆಗಳಲ್ಲಿಯೂ ಕಲಹಗಳಲ್ಲಿಯೂ ಕಷ್ಟವಾದ
ಕೆಲಸಗಳಲ್ಲಿಯೂ ನಿದ್ದೆಗೇಡುಗಳಲ್ಲಿಯೂ ಉಪವಾಸ
ಗಳಲ್ಲಿಯೂ ಬಹು ತಾಳ್ಮೆಯನ್ನು ತೋರುತ್ತೇವೆ. 6ನಾವು ದೇವರ
ಸೇವಕರೆಂಬುದನ್ನು ನಮ್ಮ ತಿಳುವಳಿಕೆಯಿಂದಲೂ ತಾಳ್ಮೆ
ಯಿಂದಲೂ ಕನಿಕರದಿಂದಲೂ ಮತ್ತು ಪರಿಶುದ್ಧ ಜೀವಿತ
ದಿಂದಲೂ ತೋರ್ಪಡಿಸಿದ್ದೇವೆ. ನಾವು ಇದನ್ನು ಪವಿತ್ರಾತ್ಮ
ನಿಂದಲೂ ನಿಜವಾದ ಪ್ರೀತಿಯಿಂದಲೂ 7ಸತ್ಯವನ್ನು ಹೇಳುವು
ದರಿಂದಲೂ ದೇವರ ಶಕ್ತಿಯಿಂದಲೂ ತೋರ್ಪಡಿಸುತ್ತೇವೆ.
ಪ್ರತಿಯೊಂದರ ವಿರೋಧವಾಗಿ ನಮ್ಮನ್ನು ಸಂರಕ್ಷಿಸಿಕೊಳ್ಳಲು
ನಮ್ಮ ಒಳ್ಳೆಯ ಜೀವಿತವನ್ನೇ ಉಪಯೋಗಿಸುತ್ತೇವೆ. 8ಕೆಲವರು
ನಮ್ಮನ್ನು ಸನ್ಮಾನಿಸುತ್ತಾರೆ; ಇನ್ನು ಕೆಲವರು ನಮಗೆ ಅವಮಾನ
ಮಾಡುತ್ತಾರೆ. ಕೆಲವರು ನಮ್ಮ ಬಗ್ಗೆ ಒಳ್ಳೆಯ ವಿಷಯಗಳನ್ನು
ಹೇಳುತ್ತಾರೆ; ಇನ್ನು ಕೆಲವರು ನಮ್ಮ ಬಗ್ಗೆ ಕೆಟ್ಟ ವಿಷಯಗಳನ್ನು
ಹೇಳುತ್ತಾರೆ. ಕೆಲವರು ನಮ್ಮನ್ನು ಸುಳ್ಳುಗಾರರೆನ್ನುತ್ತಾರೆ, ಆದರೆ
ನಾವು ಸತ್ಯವನ್ನೇ ಹೇಳುತ್ತೇವೆ. 9ನಾವು ಪ್ರಸಿದ್ಧರಾಗಿದ್ದರೂ
ಕೆಲವರು ನಮ್ಮನ್ನು ಅಪ್ರಸಿದ್ಧರಂತೆ ಕಾಣುತ್ತಾರೆ. ನಾವು ಸಾಯು
ವಂತಿದ್ದರೂ ಬದುಕಿದ್ದೇವೆ; ಶಿಕ್ಷಿಸಲ್ಪಟ್ಟರೂ ಕೊಲ್ಲಲ್ಪಡಲಿಲ್ಲ;
10ದುಃಖಿತರಂತೆ ಕಂಡರೂ ಯಾವಾಗಲೂ ಉಲ್ಲಾಸಿಸುವವ
ರಾಗಿದ್ದೇವೆ; ಬಡವರಂತೆ ಕಂಡರೂ ಅನೇಕರನ್ನು ನಂಬಿಕೆಯಲ್ಲಿ
ಐಶ್ವರ್ಯವಂತರನ್ನಾಗಿ ಮಾಡುತ್ತಿದ್ದೇವೆ; ಏನೂ ಇಲ್ಲದವರಂತೆ
ಕಂಡರೂ ವಾಸ್ತವವಾಗಿ ಎಲ್ಲವನ್ನೂ ಹೊಂದಿದವರಾಗಿದ್ದೇವೆ.
11ಕೊರಿಂಥದಲ್ಲಿರುವ ನಿಮ್ಮೊಂದಿಗೆ ಬಿಚ್ಚುಮನಸ್ಸಿನಿಂದ
ಮಾತಾಡಿದ್ದೇವೆ. ನಮ್ಮ ಹೃದಯಗಳನ್ನು ನಿಮ್ಮ ಮುಂದೆ
ತೆರೆದಿಟ್ಟಿದ್ದೇವೆ. 12ನಿಮ್ಮ ಮೇಲೆ ನಮಗಿರುವ ಪ್ರೀತಿಯು
ನಿಂತುಹೋಗಿಲ್ಲ. ಆದರೆ ನಮ್ಮ ಮೇಲೆ ನಿಮಗಿದ್ದ ಪ್ರೀತಿಯೇ
ನಿಂತುಹೋಗಿದೆ. 13ನೀವು ನನ್ನ ಮಕ್ಕಳೆಂಬಂತೆ ನಾನು
ನಿಮ್ಮೊಂದಿಗೆ ಮಾತಾಡುತ್ತಿದ್ದೇನೆ. ನಾವು ತೆರೆದಂತೆ ನೀವು ಸಹ
ನಿಮ್ಮ ಹೃದಯಗಳನ್ನು ತೆರೆಯಿರಿ.

### ಅವಿಶ್ವಾಸಿಗಳ ಮಧ್ಯದಲ್ಲಿ ಜೀವಿಸುವುದರ ಬಗ್ಗೆ ಎಚ್ಚರಿಕೆ

14ಕ್ರಿಸ್ತನಂಬಿಕೆಯಿಲ್ಲದ ಜನರಿಗೂ ನಿಮಗೂ ವ್ಯತ್ಯಾಸವಿದೆ.
ಆದ್ದರಿಂದ ನೀವು ಅವರೊಂದಿಗೆ ಸೇರಬೇಡಿ. ಒಳ್ಳೆಯದು ಮತ್ತು
ಕೆಟ್ಟದು ಒಟ್ಟಾಗಿ ಸೇರಲು ಸಾಧ್ಯವಿಲ್ಲ. ಬೆಳಕು ಕತ್ತಲೆಯೊಡನೆ
ಅನ್ಯೋನ್ಯವಾಗಿರಲು ಸಾಧ್ಯವೇ? 15ಕ್ರಿಸ್ತನೂ ಸೈತಾನನೂ
ಅನ್ಯೋನ್ಯವಾಗಿರಲು ಸಾಧ್ಯವೇ? ವಿಶ್ವಾಸಿಗಳಿಗೂ ಅವಿಶ್ವಾಸಿ
ಗಳಿಗೂ ಪಾಲುಗಾರಿಕೆಯೇನು? 16ದೇವರ ಆಲಯವು
ವಿಗ್ರಹಗಳೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲು ಸಾಧ್ಯವೇ?
ನಾವು ಜೀವಸ್ವರೂಪನಾದ ದೇವರ ಆಲಯವಾಗಿದ್ದೇವೆ.
ದೇವರು ಹೇಳಿದಂತೆ:

> ‘‘ನಾನು ಅವರೊಂದಿಗೆ ವಾಸಿಸುವೆನು; ಅವ
> ರೊಂದಿಗೆ ನಡೆಯುವೆನು; ಅವರ ದೇವರಾಗಿ
> ರುವೆನು; ಅವರು ನನ್ನ ಜನರಾಗಿರುವರು.’’
>
> *ಯಾಜಕಕಾಂಡ 26:11-12*

> 17‘‘ಆದ್ದರಿಂದ ಆ ಜನರನ್ನು ಬಿಟ್ಟು ಹೊರಬನ್ನಿರಿ;
> ಅವರಿಂದ ಬೇರ್ಪಡಿರಿ ಎನ್ನತ್ತಾನೆ ಪ್ರಭುವು.
> ಅಶುದ್ಧವಾದ ಯಾವುದನ್ನು ಮುಟ್ಟಬೇಡಿ, ಆಗ
> ನಾನು ನಿಮ್ಮನ್ನು ಸ್ವೀಕರಿಸಿಕೊಳ್ಳುವೆನು.’’
>
> *ಯೆಶಾಯ 52:11*

> 18‘‘ನಾನು ನಿಮ್ಮ ತಂದೆಯಾಗಿರುವೆನು, ಮತ್ತು
> ನೀವು ನನ್ನ ಪುತ್ರಪುತ್ರಿಯರಾಗುವಿರಿ ಎನ್ನುತ್ತಾನೆ
> ಸರ್ವಶಕ್ತನಾದ ಪ್ರಭುವು.’’
>
> *2 ಸಮುವೇಲ 7:14;7:8*

7 ಪ್ರಿಯ ಸ್ನೇಹಿತರೇ, ನಾವು ದೇವರಿಂದ ಈ ವಾಗ್ದಾನಗಳನ್ನು
ಹೊಂದಿದ್ದೇವೆ. ಆದ್ದರಿಂದ ನಮ್ಮನ್ನು ಶುದ್ಧರನ್ನಾಗಿ ಮಾಡಿ
ಕೊಳ್ಳಬೇಕು. ನಮ್ಮ ದೇಹವನ್ನಾಗಲಿ ನಮ್ಮ ಆತ್ಮವನ್ನಾಗಲಿ
ಅಶುದ್ಧಗೊಳಿಸುವ ಎಲ್ಲಾ ವಿಧದ ಮಲಿನತೆಯಿಂದ ನಾವು
ದೂರವಿರೋಣ. ನಾವು ದೇವರನ್ನು ಗೌರವಿಸುವುದರಿಂದ ಪರಿ
ಶುದ್ಧವಾದ ಬಾಳ್ವೆಯನ್ನು ನಡೆಸಲು ನಾವು ಪ್ರಯತ್ನಿಸಬೇಕು.

### ಪೌಲನ ಆನಂದ

2ನಿಮ್ಮ ಹೃದಯಗಳಲ್ಲಿ ನಮಗೆ ಸ್ಥಳವನ್ನು ಕೊಡಿರಿ. ನಾವು
ನಿಮ್ಮಲ್ಲಿ ಯಾರಿಗೂ ಕೆಟ್ಟದ್ದನ್ನು ಮಾಡಿಲ್ಲ. ಯಾರ ನಂಬಿಕೆ
ಯನ್ನೂ ಹಾಳುಮಾಡಿಲ್ಲ; ಯಾರನ್ನೂ ವಂಚಿಸಲಿಲ್ಲ. 3ನಾನು
ಇದನ್ನು ಹೇಳುತ್ತಿರುವುದು ನಿಮ್ಮನ್ನು ನಿಂದಿಸುವುದಕ್ಕಾಗಿಯಲ್ಲ.
ನಿಮ್ಮೊಂದಿಗೆ ಬದುಕುವವಷ್ಟರಮಟ್ಟಿಗೆ ಮತ್ತು ಸಾಯುವವಷ್ಟರ
ಮಟ್ಟಿಗೆ ನಿಮ್ಮನ್ನು ಅಪಾರವಾಗಿ ಪ್ರೀತಿಸುತ್ತೇವೆಂದು ನಾನು
ಮೊದಲೇ ನಿಮಗೆ ತಿಳಿಸಿದ್ದೇನೆ. 4ನಿಮ್ಮ ವಿಷಯದಲ್ಲಿ ನನಗೆ
ಬಹಳ ಭರವಸವಿದೆ. ನಾನು ನಿಮ್ಮ ವಿಷಯದಲ್ಲಿ ಹೆಮ್ಮೆಪಡು

ತ್ತೇನೆ. ನೀವು ನನ್ನನ್ನು ಬಹಳವಾಗಿ ಸಂತೈಸಿದಿರಿ. ನಮ್ಮ ಎಲ್ಲಾ
ಇಕ್ಕಟ್ಟುಗಳಲ್ಲಿಯೂ ನನಗೆ ಮಹಾ ಆನಂದವಿದೆ. 5ನಾವು
ಮಕೆದೋನಿಯಕ್ಕೆ ಬಂದಾಗ ನಮಗೆ ವಿಶ್ರಾಂತಿಯೇ ಇರಲಿಲ್ಲ.
ನಮ್ಮ ಸುತ್ತಮುತ್ತಲೆಲ್ಲಾ ಇಕ್ಕಟ್ಟುಗಳಿದ್ದವು. ಹೊರಗೆ ಕಲಹ
ವಿತ್ತು, ಒಳಗೆ ಭಯವಿತ್ತು. 6ಆದರೆ ದೇವರು ಇಕ್ಕಟ್ಟುಗಳಲ್ಲಿರುವ
ಜನರನ್ನು ಸಂತೈಸುತ್ತಾನೆ. ತೀತನು ಬಂದಾಗ ದೇವರು ನಮ್ಮನ್ನು
ಸಂತೈಸಿದನು. 7ಅವನ ಆಗಮನದಿಂದಲೂ ನೀವು ಅವನಿಗೆ
ಕೊಟ್ಟ ಆದರಣೆಯಿಂದಲೂ ನಮಗೆ ಸಮಾಧಾನವಾಯಿತು.
ನನ್ನನ್ನು ನೋಡಲು ನಿಮಗಿರುವ ಹಂಬಲದ ಕುರಿತಾಗಿಯೂ
ನಿಮ್ಮ ಕಾರ್ಯಗಳಿಂದ ನಿಮಗಾಗಿರುವ ದುಃಖದ ಕುರಿತಾ
ಗಿಯೂ ನನ್ನ ವಿಷಯವಾಗಿ ನಿಮಗಿರುವ ಮಹಾಹಿತಚಿಂತನೆಯ
ಕುರಿತಾಗಿಯೂ ಅವನು ನನಗೆ ಹೇಳಿದಾಗ ನನಗೆ ಬಹಳ
ಸಂತೋಷವಾಯಿತು. 8ನಾನು ನಿಮಗೆ ಬರೆದ ಪತ್ರವು ನಿಮಗೆ
ದುಃಖವನ್ನು ಉಂಟುಮಾಡಿದ್ದರೂ, ಅದನ್ನು ಬರೆದದ್ದಕ್ಕೆ ನನಗೆ
ದುಃಖವಿಲ್ಲ. ಆ ಪತ್ರವು ನಿಮಗೆ ದುಃಖವನ್ನು ಉಂಟು
ಮಾಡಿತೆಂದು ನನಗೆ ಗೊತ್ತಿದೆ. ಆ ವಿಷಯದಲ್ಲಿ ನನಗೆ ವ್ಯಸನ
ವಾಯಿತು. ಆದರೆ ಅದು ನಿಮ್ಮನ್ನು ಸ್ವಲ್ಪಕಾಲದವರೆಗೆ ಮಾತ್ರ
ದುಃಖಿತರನ್ನಾಗಿ ಮಾಡಿತು. 9ಈಗ ನಾನು ಸಂತೋಷವಾಗಿ
ದ್ದೇನೆ. ನಿಮ್ಮನ್ನು ದುಃಖಿತರನ್ನಾಗಿ ಮಾಡಿದ್ದಕ್ಕಾಗಿ ನಾನು
ದುಃಖಿಸುತ್ತಿಲ್ಲ. ಆದರೆ ನಿಮ್ಮ ದುಃಖವು ನಿಮ್ಮ ಹೃದಯಗಳಲ್ಲಿ
ಪರಿವರ್ತನೆಯನ್ನು ಉಂಟುಮಾಡಿದ್ದರಿಂದ ನಾನು ಸಂತೋಷ
ವಾಗಿದ್ದೇನೆ. ದೇವರ ಇಚ್ಛೆಗನುಸಾರವಾಗಿ ನೀವು ದುಃಖಿತ
ರಾದಿರಿ. ಆದ್ದರಿಂದ ನಮ್ಮಿಂದ ನಿಮಗೆ ಯಾವ ರೀತಿಯಲ್ಲಿಯೂ
ನೋವಾಗಲಿಲ್ಲ. 10ದೇವರ ಇಷ್ಟಾನುಸಾರವಾದ ದುಃಖವು
ಹೃದಯವನ್ನೂ ಜೀವಿತವನ್ನೂ ಪರಿವರ್ತಿಸುತ್ತದೆ. ಈ ಪರಿ
ವರ್ತನೆಯು ರಕ್ಷಣೆಗೆ ನಡೆಸುತ್ತದೆ. ಈ ಪರಿವರ್ತನೆಯ ವಿಷಯ
ದಲ್ಲಿ ನಾವು ವ್ಯಸನಪಡಬೇಕಾಗಿಲ್ಲ. ಆದರೆ, ಲೋಕವು ಹೊಂದಿ
ರುವ ದುಃಖವು ಮರಣವನ್ನು ಬರಮಾಡುತ್ತದೆ. 11ನೀವು
ಯಾವ ದುಃಖವನ್ನು ಹೊಂದಿರಬೇಕೆಂದು ದೇವರು ಬಯಸಿ
ದ್ದನೋ ಅದೇ ದುಃಖವನ್ನು ನೀವು ಹೊಂದಿದ್ದೀರಿ. ಆ ದುಃಖವು
ನಿಮ್ಮನ್ನು ಬಹು ಆಸಕ್ತಿಯುಳ್ಳವರನ್ನಾಗಿ ಮಾಡಿತು; ನೀವು
ತಪ್ಪಿತಸ್ಥರಾಗಿರಲಿಲ್ಲವೆಂದು ನಿರೂಪಿಸಬೇಕೆಂಬ ಬಯಕೆಯನ್ನು
ನಿಮ್ಮಲ್ಲಿ ಉಂಟುಮಾಡಿತು; ನಿಮ್ಮನ್ನು ಕೋಪಗೊಳಿಸಿತು ಮತ್ತು
ಭಯಗೊಳಿಸಿತು; ನನ್ನನ್ನು ನೋಡಬೇಕೆಂಬ ಬಯಕೆಯನ್ನು
ನಿಮ್ಮಲ್ಲಿ ಉಂಟುಮಾಡಿತು; ನನ್ನ ಬಗ್ಗೆ ಚಿಂತಿಸುವಂತೆ ಮಾಡಿತು;
ತಪ್ಪಿತಸ್ಥರನ್ನು ದಂಡಿಸಬೇಕೆಂಬ ಬಯಕೆಯನ್ನು ಉಂಟು
ಮಾಡಿತು. ಆ ಸಮಸ್ಯೆಯ ಯಾವ ವಿಷಯದಲ್ಲಿಯೂ ನೀವು
ಅಪರಾಧಿಗಳಾಗಿರಲಿಲ್ಲವೆಂದು ನಿರೂಪಿಸಿದಿರಿ. 12ನಾನು ಆ
ಪತ್ರವನ್ನು ಬರೆದದ್ದು ತಪ್ಪು ಮಾಡಿದವನಿಗೋಸ್ಕರವಲ್ಲ, ಆ
ತಪ್ಪಿನಿಂದ ದುಃಖಕ್ಕೆ ಒಳಗಾದವನಿಗೋಸ್ಕರವೂ ಅಲ್ಲ. ಆದರೆ
ನಮ್ಮ ವಿಷಯದಲ್ಲಿ ನಿಮಗಿರುವ ಮಹಾಚಿಂತೆಯನ್ನು ನೀವು
ದೇವರ ಎದುರಿನಲ್ಲಿ ನೋಡುವಂತಾಗಬೇಕೆಂದು ಆ ಪತ್ರವನ್ನು
ಬರೆದೆನು. 13ಆದ್ದರಿಂದಲೇ ನಮಗೆ ಆದರಣೆಯಾಯಿತು.
ತೀತನು ಬಹು ಸಂತೋಷವಾಗಿರುವುದನ್ನು ಕಂಡು ನಮಗೆ
ಮತ್ತಷ್ಟು ಸಂತೋಷವಾಯಿತು. ನೀವೆಲ್ಲರೂ ಅವನನ್ನು
ಸಂತೋಷಗೊಳಿಸಿದಿರಿ. 14ತೀತನ ಮುಂದೆ ನಾನು ನಿಮ್ಮನ್ನು
ಹೊಗಳಿದೆನು. ಅದು ಸಮರ್ಪಕವೆಂದು ನೀವು ನಿರೂಪಿಸಿದಿರಿ.
ನಾವು ನಿಮಗೆ ಹೇಳಿದ ಪ್ರತಿಯೊಂದೂ ಸತ್ಯವಾಗಿತ್ತು. ನಾವು
ತೀತನ ಮುಂದೆ ನಿಮ್ಮ ವಿಷಯದಲ್ಲಿ ಹೇಳಿದ ಹೊಗಳಿಕೆಯ
ಮಾತುಗಳೆಲ್ಲಾ ಸತ್ಯವೆಂದು ನೀವು ನಿರೂಪಿಸಿದಿರಿ. 15ನೀವೆ
ಲ್ಲರೂ ವಿಧೇಯರಾಗಿರಲು ಸಿದ್ಧರಾಗಿದ್ದನ್ನು ಜ್ಞಾಪಿಸಿ
ಕೊಂಡಾಗಲೆಲ್ಲಾ ಅವನಿಗೆ ನಿಮ್ಮ ಮೇಲೆ ಪ್ರೀತಿಯು
ಹೆಚ್ಚಾಗುತ್ತದೆ. ನೀವು ಅವನನ್ನು ಗೌರವದಿಂದಲೂ ಭಯ
ದಿಂದಲೂ ಸ್ವೀಕರಿಸಿದಿರಿ. 16ನನಗೆ ನಿಮ್ಮ ವಿಷಯದಲ್ಲಿ ಪೂರ್ಣ
ಭರವಸೆ ಇರುವುದರಿಂದ ಬಹು ಸಂತೋಷಪಡುತ್ತೇನೆ.

## ಕ್ರೈಸ್ತರ ಕೊಡುವಿಕೆ

8 ಸಹೋದರ ಸಹೋದರಿಯರೇ, ಮಕೆದೋನಿಯದ
ಸಭೆಗಳಲ್ಲಿ ದೇವರು ತೋರಿದ ಕೃಪೆಯ ಬಗ್ಗೆ ನಿಮಗೆ
ತಿಳಿಸಲು ಇಷ್ಟಪಡುತ್ತೇವೆ. 2ಆ ವಿಶ್ವಾಸಿಗಳು ಅತೀವ ಕಷ್ಟಗಳಿಂದ
ಪರೀಕ್ಷಿಸಲ್ಪಟ್ಟಿದ್ದಾರೆ. ಅವರು ಬಹಳ ಬಡಜನರು. ಆದರೆ
ಅವರು ತಮ್ಮ ಮಹಾ ಆನಂದದಿಂದ ಬಹಳವಾಗಿ ಕೊಟ್ಟರು.
3ತಮ್ಮಿಂದ ಸಾಧ್ಯವಾದಷ್ಟರ ಮಟ್ಟಿಗೆ ಕೊಟ್ಟಿದ್ದಾರೆಂದು ನಾನು
ನಿಮಗೆ ಹೇಳುತ್ತೇನೆ. ಅವರು ತಮ್ಮ ಶಕ್ತಿಮೀರಿ ಕೊಟ್ಟಿದ್ದಾರೆ.
ಅವರು ತಾವಾಗಿಯೇ ಕೊಟ್ಟರು. ಕೊಡಬೇಕೆಂದು ಅವರಿಗೆ
ಯಾರೂ ಹೇಳಲಿಲ್ಲ. 4ದೇವಜನರಿಗೋಸ್ಕರವಾದ ಈ ಸೇವೆ
ಯಲ್ಲಿ ತಾವೂ ಪಾಲುಗಾರರಾಗುವ ಭಾಗ್ಯ ದೊರೆಯ
ಬೇಕೆಂದು ಅವರು ನಮ್ಮನ್ನು ಪದೇಪದೇ ಕೇಳಿಕೊಂಡರು
ಮತ್ತು ಬೇಡಿಕೊಂಡರು. 5ನಾವೆಂದೂ ನೆನೆಸಿಲ್ಲದ ರೀತಿಯಲ್ಲಿ
ಅವರು ಕೊಟ್ಟರು. ಅವರು ತಮ್ಮ ಹಣವನ್ನು ನಮಗೆ ಕೊಡುವು
ದಕ್ಕಿಂತ ಮೊದಲು ತಮ್ಮನ್ನೇ ಪ್ರಭುವಿಗೂ ನಮಗೂ ಒಪ್ಪಿಸಿ
ಕೊಟ್ಟರು. ದೇವರು ಬಯಸುವುದು ಇದನ್ನೇ. 6ಆದ್ದರಿಂದ,
ವಿಶೇಷವಾದ ಈ ಕೃಪಾಕಾರ್ಯವನ್ನು ಪೂರೈಸಲು ನಿಮಗೆ
ಸಹಾಯ ಮಾಡಬೇಕೆಂದು ನಾವು ತೀತನನ್ನು ಕೇಳಿಕೊಂಡೆವು.
ಈ ಕಾರ್ಯವನ್ನು ಪ್ರಾರಂಭಿಸಿದವನು ತೀತನೇ. 7ನೀವು ಪ್ರತಿ
ಯೊಂದರಲ್ಲಿಯೂ ಅಂದರೆ, ನಂಬಿಕೆಯಲ್ಲಿ, ಮಾತಾಡುವುದ
ರಲ್ಲಿ, ಜ್ಞಾನದಲ್ಲಿ, ಸಹಾಯಮಾಡಬೇಕೆಂಬ ಆಸಕ್ತಿಯಲ್ಲಿ
ಮತ್ತು ನಮ್ಮಿಂದ ಕಲಿತುಕೊಂಡ ಪ್ರೀತಿಯಲ್ಲಿ ಶ್ರೀಮಂತ
ರಾಗಿದ್ದೀರಿ. ಆದ್ದರಿಂದ ಕೃಪಾಕಾರ್ಯದಲ್ಲಿಯೂ ನೀವು
ಶ್ರೀಮಂತರಾಗಿರಬೇಕೆಂದು ನಾವು ಬಯಸುತ್ತೇವೆ. 8ನೀವು
ಕೊಡಬೇಕೆಂದು ನಾನು ಆಜ್ಞಾಪಿಸುತ್ತಿಲ್ಲ. ಆದರೆ ನಿಮ್ಮ
ಪ್ರೀತಿಯು ನಿಜವಾದ ಪ್ರೀತಿಯೇ ಎಂಬುದನ್ನು ನಾನು ನೋಡ
ಬಯಸುತ್ತೇನೆ. ಸಹಾಯ ಮಾಡಲು ಇತರ ಜನರಿಗಿರುವ ನಿಜ
ವಾದ ಬಯಕೆಯನ್ನು ನಿಮಗೆ ತೋರಿಸುವುದರ ಮೂಲಕವಾಗಿ
ನಾನು ನಿಮ್ಮನ್ನು ಪರೀಕ್ಷಿಸುತ್ತೇನೆ. 9ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಕೃಪೆಯು ನಿಮಗೆ ಗೊತ್ತಿದೆ. ಕ್ರಿಸ್ತನು ದೇವರೊಂದಿಗೆ
ಶ್ರೀಮಂತಿಕೆಯಲ್ಲಿದ್ದರೂ ನಿಮಗೋಸ್ಕರವಾಗಿ ಬಡವ
ನಾದದ್ದು ನಿಮಗೆ ಗೊತ್ತಿದೆ. ನೀವು ಶ್ರೀಮಂತರಾಗಬೇಕೆಂದು
ಕ್ರಿಸ್ತನು ಬಡವನಾದನು. 10ನಾನು ನಿಮಗೆ ಹೇಳುವುದೇ
ನಂದರೆ: ಕಳೆದ ವರ್ಷ ಕೊಡುವುದರಲ್ಲಿ ನೀವೇ ಮೊದಲಿಗ
ರಾಗಿದ್ದಿರಿ ಮತ್ತು ಮೊಟ್ಟಮೊದಲನೆಯದಾಗಿ ಕೊಟ್ಟವರು
ನೀವೇ. 11ಆದ್ದರಿಂದ ನೀವು ಆರಂಭಿಸಿದ ಕಾರ್ಯವನ್ನು ಈಗ
ಪೂರ್ಣಗೊಳಿಸಿರಿ. ಆಗ, ನಿಮ್ಮ ಕಾರ್ಯ ಮತ್ತು ನಿಮ್ಮ ಸಿದ್ಧ
ಮನಸ್ಸು ಸರಿಸಮಾನವಾಗಿರುವುದು. ನಿಮ್ಮಲ್ಲಿರುವುದನ್ನು

ಕೊಡಿರಿ. 12ನೀವು ಕೊಡಬೇಕೆಂದು ಕೊಟ್ಟರೆ ನಿಮ್ಮ ದಾನವು
ಸ್ವೀಕೃತವಾಗುವುದು. ನಿಮ್ಮ ದಾನದ ಮೌಲ್ಯಮಾಪನವು ನೀವು
ಏನನ್ನು ಹೊಂದಿದ್ದೀರಿ ಎಂಬುದರ ಮೇಲೆಯೇ ಹೊರತು
ನೀವು ಏನನ್ನು ಹೊಂದಿಲ್ಲ ಎಂಬುದರ ಮೇಲೆ ಆಧಾರ
ಗೊಂಡಿಲ್ಲ. 13ಇತರ ಜನರು ಸುಖವಾಗಿರುವಾಗ ನೀವು ಕಷ್ಟ
ದಿಂದಿರುವುದು ನಮಗೆ ಇಷ್ಟವಿಲ್ಲ. ಪ್ರತಿಯೊಂದರಲ್ಲಿಯೂ
ಸಮಾನತೆ ಇರಬೇಕೆಂಬುದೇ ನಮ್ಮ ಬಯಕೆ. 14ಈಗ ನಿಮ್ಮಲ್ಲಿ
ಬೇಕಾದಷ್ಟಿದೆ. ನಿಮ್ಮ ಈ ಸಮೃದ್ಧಿಯು ಇತರ ಜನರ ಕೊರತೆ
ಯನ್ನು ನೀಗುಸುವುದು. ಬಳಿಕ, ಅವರು ಸಮೃದ್ಧರಾಗಿರುವಾಗ
ನಿಮ್ಮ ಕೊರತೆಯನ್ನು ನೀಗಿಸುವರು. ಹೀಗೆ ಎಲ್ಲರೂ ಸಮಾನ
ರಾಗಿರುವರು. 15ಪವಿತ್ರ ಗ್ರಂಥದಲ್ಲಿ ಬರೆದಿರುವಂತೆ
ಇದಾಗುವುದು.

> ‘‘ಬಹಳವಾಗಿ ಶೇಖರಿಸಿಕೊಂಡವನಿಗೆ ಏನೂ
> ಹೆಚ್ಚಾಗಲಿಲ್ಲ, ಸ್ವಲ್ಪ ಶೇಖರಿಸಿಕೊಂಡವನಿಗೆ
> ಏನೂ ಕಡಿಮೆಯಾಗಲಿಲ್ಲ.’’
>
> *ವಿಮೋಚನಕಾಂಡ 16:18*

## ತೀತನು ಮತ್ತು ಅವನ ಸಂಗಡಿಗರು

16ನಿಮ್ಮ ಮೇಲೆ ನನಗಿರುವ ಪ್ರೀತಿಯನ್ನು ದೇವರು ತೀತ
ನಿಗೂ ಕೊಟ್ಟದ್ದಕ್ಕಾಗಿ ದೇವರನ್ನು ಸ್ತುತಿಸುತ್ತೇನೆ. 17ನಾವು
ಕೇಳಿಕೊಂಡ ಕಾರ್ಯಗಳನ್ನು ಮಾಡಲು ತೀತನು ಒಪ್ಪಿ
ಕೊಂಡನು. ನಿಮ್ಮ ಬಳಿಗೆ ಬರಲು ಅವನು ಅತ್ಯಾಸಕ್ತನಾಗಿದ್ದನು.
ಇದು ಅವನ ಸ್ವಂತ ಆಲೋಚನೆ. 18ಎಲ್ಲಾ ಸಭೆಗಳಲ್ಲಿ
ಹೊಗಳಿಕೆಗೆ ಪಾತ್ರನಾಗಿರುವ ಒಬ್ಬ ಸಹೋದರನನ್ನು ತೀತ
ನೊಡನೆ ಕಳುಹಿಸುತ್ತಿದ್ದೇವೆ. ಈ ಸಹೋದರನು ಸುವಾರ್ತಾ
ಸೇವೆಯ ವಿಷಯದಲ್ಲಿ ಕೀರ್ತಿ ಪಡೆದಿದ್ದಾನೆ. 19ಇದಲ್ಲದೆ, ನಾವು
ಈ ಸಹಾಯ ಧನವನ್ನು ತೆಗೆದುಕೊಂಡು ಹೋಗುವಾಗ ನಮ್ಮ
ಸಂಗಡವಿರುವುದಕ್ಕಾಗಿ ಸಭೆಗಳವರು ಈ ಸಹೋದರನನ್ನು
ಆಯ್ಕೆಮಾಡಿದ್ದಾರೆ. ದೇವರ ಮಹಿಮೆಗಾಗಿಯೂ ಮತ್ತು
ಸಹಾಯ ಮಾಡಲು ನಿಜವಾಗಿ ಬಯಸುತ್ತೇವೆ ಎಂಬುದನ್ನು
ತೋರಿಸುವುದಕ್ಕಾಗಿಯೂ ಈ ಸೇವಾಕಾರ್ಯವನ್ನು ಮಾಡುತ್ತಿ
ದ್ದೇವೆ. 20ಹೇರಳವಾದ ಈ ಸಹಾಯ ಧನವನ್ನು ನಾವು ನೋಡಿ
ಕೊಳ್ಳುವ ಬಗ್ಗೆ ಟೀಕಿಸಲು ಯಾರಿಗೂ ಅವಕಾಶ ಕೊಡಬಾರ
ದೆಂದು ಎಚ್ಚರಿಕೆಯಿಂದಿದ್ದೇವೆ. 21ಪ್ರಭುವು ಯಾವುದನ್ನು
ಸರಿಯಾದದ್ದೆಂದು ಸ್ವೀಕರಿಸಿಕೊಳ್ಳುವನೊ ಮತ್ತು ಜನರು
ಯಾವುದನ್ನು ಸರಿಯಾದದ್ದೆಂದು ಯೋಚಿಸುವರೊ ಅದನ್ನೇ
ಮಾಡಲು ನಾವು ಪ್ರಯತ್ನಿಸುತ್ತಿದ್ದೇವೆ. 22ಇದಲ್ಲದೆ, ಸಹಾಯ
ಮಾಡಲು ಯಾವಾಗಲೂ ಸಿದ್ಧನಾಗಿರುವ ನಮ್ಮ ಸಹೋದರ
ನನ್ನು ಅವರೊಂದಿಗೆ ಕಳುಹಿಸಿಕೊಡುತ್ತಿದ್ದೇವೆ. ಅವನು ಅನೇಕ
ವಿಧದಲ್ಲಿ ತನ್ನನ್ನು ನಿರೂಪಿಸಿದ್ದಾನೆ. ಈಗ ಅವನಿಗೆ ನಿಮ್ಮಲ್ಲಿ
ಹೆಚ್ಚು ಭರವಸೆ ಇರುವುದರಿಂದ ಮತ್ತಷ್ಟು ಸಹಾಯ ಮಾಡಲು
ಬಯಸುತ್ತಾನೆ. 23ನಾನು ತೀತನ ಬಗ್ಗೆ ಹೇಳುವುದೇನೆಂದರೆ,
ಅವನು ನನ್ನ ಸಹೋದ್ಯೋಗಿಯಾಗಿದ್ದಾನೆ. ನಿಮಗೆ ಸಹಾಯ
ಮಾಡಲು ಅವನು ನನ್ನೊಂದಿಗೆ ಕೆಲಸ ಮಾಡುತ್ತಿದ್ದಾನೆ. ಇತರ
ಸಹೋದರರ ಬಗ್ಗೆ ನಾನು ಹೇಳುವುದೇನೆಂದರೆ, ಅವರು ಸಭೆ
ಗಳಿಂದ ಕಳುಹಿಸಲ್ಪಟ್ಟವರಾಗಿದ್ದಾರೆ ಮತ್ತು ಕ್ರಿಸ್ತನಿಗೆ
ಮಹಿಮೆಯನ್ನು ಉಂಟುಮಾಡುವಂಥವರಾಗಿದ್ದಾರೆ. 24ಆದ್ದ
ರಿಂದ ನಿಮ್ಮಲ್ಲಿ ನಿಜವಾಗಿಯೂ ಪ್ರೀತಿಯಿದೆ ಎಂಬುದನ್ನು ಈ
ಜನರಿಗೆ ತೋರಿಸಿಕೊಡಿರಿ. ನಾವು ನಿಮ್ಮ ವಿಷಯದಲ್ಲಿ ಯಾಕೆ
ಹೆಮ್ಮೆಪಡುತ್ತೇವೆಂಬುದನ್ನು ಇವರಿಗೆ ತೋರಿಸಿಕೊಡಿರಿ. ಆಗ
ಎಲ್ಲಾ ಸಭೆಗಳವರು ಅದನ್ನು ನೋಡಲು ಸಾಧ್ಯವಾಗುವುದು.

## ಕ್ರೈಸ್ತರಿಗೆ ಸಹಾಯಮಾಡಿರಿ

9 ದೇವಜನರಿಗೋಸ್ಕರವಾದ ಈ ಸಹಾಯದ ಬಗ್ಗೆ ನಾನು
ನಿಮಗೆ ಬರೆಯುವುದು ನಿಜವಾಗಿಯೂ ಅಗತ್ಯವಿಲ್ಲ.
2ಸಹಾಯ ಮಾಡಬೇಕೆಂಬ ಬಯಕೆಯು ನಿಮಗಿದೆಯೆಂದು
ನನಗೆ ಗೊತ್ತಿದೆ. ಮಕೆದೋನಿಯದಲ್ಲಿ ಜನರಿಗೆ ನಿಮ್ಮ ಈ
ವಿಷಯದಲ್ಲಿ ಹೆಮ್ಮೆಯಿಂದ ಹೇಳುತ್ತಲೇ ಇದ್ದೇನೆ.
ಅಖಾಯದಲ್ಲಿರುವ ನೀವು ಕಳೆದ ವರ್ಷದಿಂದಲೂ ಕೊಡಲು
ಸಿದ್ಧರಾಗಿದ್ದೀರೆಂದು ಅವರಿಗೆ ಹೇಳಿದೆನು. ನಿಮ್ಮಲ್ಲಿರುವ
ಕೊಡಬೇಕೆಂಬ ಬಯಕೆಯು ಇಲ್ಲಿರುವ ಅನೇಕ ಜನರಲ್ಲಿ
ಕೊಡಬೇಕೆಂಬ ಬಯಕೆಯನ್ನು ಉಂಟುಮಾಡಿದೆ. 3ನಾನು
ಸಹೋದರರನ್ನು ನಿಮ್ಮಲ್ಲಿಗೆ ಕಳುಹಿಸಿಕೊಡುತ್ತಿದ್ದೇನೆ. ನಿಮ್ಮ
ಬಗ್ಗೆ ಈ ವಿಷಯದಲ್ಲಿ ಹೊಗಳಿದ್ದು ವ್ಯರ್ಥವಾಗುವುದು ನನಗೆ
ಇಷ್ಟವಿಲ್ಲ. ನಾನು ಹೇಳಿಕೊಂಡಂತೆ ನೀವು ಸಿದ್ಧರಾಗಿರ
ಬೇಕೆಂದು ಆಶಿಸುತ್ತೇನೆ. 4ಒಂದು ವೇಳೆ ಮಕೆದೋನಿಯದ
ಜನರಲ್ಲಿ ಯಾರಾದರೂ ನನ್ನೊಂದಿಗೆ ಬಂದಾಗ ನೀವು ಸಿದ್ಧ
ರಾಗಿಲ್ಲದಿದ್ದರೆ ನಾವು ನಾಚಿಕೆಗೆ ಗುರಿಯಾಗುತ್ತೇವೆ. ನಿಮ್ಮ
ವಿಷಯದಲ್ಲಿ ನಾವು ಬಹಳ ಭರವಸೆ ಇಟ್ಟದ್ದರಿಂದ ನಾವು
ನಾಚಿಕೆಗೆ ಗುರಿಯಾಗುವೆವು (ಮತ್ತು ನೀವೂ ಸಹ ನಾಚಿಕೆಗೆ
ಗುರಿಯಾಗುವಿರಿ.) 5ಆದ್ದರಿಂದ ನಾನು ಬರುವುದಕ್ಕಿಂತ
ಮೊದಲು ನಿಮ್ಮ ಬಳಿಗೆ ಹೋಗುವಂತೆ ಈ ಸಹೋದರರನ್ನು
ಕೇಳಿಕೊಳ್ಳಬೇಕೆಂದು ನಾನು ಆಲೋಚಿಸಿದೆನು. ನೀವು
ವಾಗ್ದಾನಮಾಡಿದ ಸಹಾಯ ಧನವನ್ನು ಇವರು ಸಂಗ್ರಹಿಸು
ವರು. ಆಗ, ನಾವು ಬರುವಷ್ಟರಲ್ಲಿ ನಿಮ್ಮ ಸಹಾಯ ಧನವು
ಸಿದ್ಧವಾಗಿರುವುದು. ಈ ಸಹಾಯ ಧನವು ನಿಮ್ಮ ಹೃತ್ಪೂರ್ವಕ
ವಾದ ದಾನವೇ ಹೊರತು ಸಂಕಟದಿಂದ ಕೊಟ್ಟ ದಾನವಲ್ಲ.
6ಇದನ್ನು ಜ್ಞಾಪಕದಲ್ಲಿಟ್ಟುಕೊಂಡಿರಿ: ಸ್ವಲ್ಪ ಬಿತ್ತುವವನು
ಕೇವಲ ಸ್ವಲ್ಪವನ್ನೇ ಕೊಯ್ಯುವನು, ಆದರೆ ಹೆಚ್ಚಾಗಿ ಬಿತ್ತುವವನು
ಹೆಚ್ಚಾಗಿ ಕೊಯ್ಯುವನು. 7ಪ್ರತಿಯೊಬ್ಬ ವ್ಯಕ್ತಿಯು ತನ್ನ ಹೃದಯ
ದಲ್ಲಿ ಎಷ್ಟನ್ನು ನಿರ್ಧರಿಸಿಕೊಂಡಿದ್ದಾನೊ ಅಷ್ಟನ್ನೇ ಕೊಡಬೇಕು.
ಯಾವನೂ ದುಃಖದಿಂದ ಕೊಡಬಾರದು. ಅಲ್ಲದೆ ಯಾವನೂ
ಒತ್ತಾಯದ ದೆಸೆಯಿಂದ ಕೊಡಬಾರದು. ಸಂತೋಷವಾಗಿ
ಕೊಡುವವನನ್ನು ದೇವರು ಪ್ರೀತಿಸುತ್ತಾನೆ. 8ಮತ್ತು ನಿಮಗೆ
ಅಗತ್ಯವಾದದ್ದಕ್ಕಿಂತಲೂ ಹೆಚ್ಚು ಆಶೀರ್ವಾದಗಳನ್ನು ದೇವರು
ಕೊಡಬಲ್ಲನು. ಆಗ ನಿಮ್ಮಲ್ಲಿ ನಿಮಗೆ ಅಗತ್ಯವಾದ ಪ್ರತಿ
ಯೊಂದೂ ಯಾವಾಗಲೂ ಇರುವುದು. ಪ್ರತಿಯೊಂದು ಒಳ್ಳೆಯ
ಕಾರ್ಯಕ್ಕೆ ಕೊಡಲು ನಿಮ್ಮಲ್ಲಿ ಸಾಕಷ್ಟು ಇರುವುದು. 9ಪವಿತ್ರ
ಗ್ರಂಥದಲ್ಲಿ ಹೀಗೆ ಬರೆದಿದೆ:

> ‘‘ಆತನು ಬಡವರಿಗೆ ಉದಾರವಾಗಿ ಕೊಡುವನು;
> ಆತನ ಕರುಣೆಯು ಶಾಶ್ವತವಾಗಿರುವುದು.’’
>
> *ಕೀರ್ತನೆ 112:9*

10ಬಿತ್ತುವವನಿಗೆ ಬೀಜವನ್ನು ಕೊಡುವವನು ದೇವರೇ.
ಆತನು ಆಹಾರಕ್ಕಾಗಿ ರೊಟ್ಟಿಯನ್ನು ಕೊಡುವನು. ಅಂತೆಯೇ,
ದೇವರು ಆತ್ಮಿಕ ಬೀಜವನ್ನು ಕೊಡುವನು ಮತ್ತು ನಿಮ್ಮ ಬೀಜ
ವನ್ನು ಬೆಳೆಯಮಾಡುವನು. ನಿಮ್ಮ ಒಳ್ಳೆಯ ಕ್ರಿಯೆಯಿಂದ
ಆತನು ಮಹಾ ಸುಗ್ಗಿಯನ್ನು ಉಂಟುಮಾಡುವನು.
11ಯಾವಾಗಲೂ ಉದಾರವಾಗಿ ಕೊಡಬೇಕೆಂದು ದೇವರು
ನಿಮ್ಮನ್ನು ಪ್ರತಿಯೊಂದು ವಿಷಯದಲ್ಲಿಯೂ ಶ್ರೀಮಂತ
ರನ್ನಾಗಿ ಮಾಡುವನು. ನಮ್ಮ ಮೂಲಕವಾಗಿ ನೀವು ಕೊಡುವ
ಸಹಾಯ ಧನದ ನಿಮಿತ್ತ ಜನರು ದೇವರಿಗೆ ಕೃತಜ್ಞತಾಸ್ತುತಿ
ಮಾಡುವರು. 12ನೀವು ಮಾಡುವ ಈ ಸೇವಾಕಾರ್ಯದಿಂದ
ಕೊರತೆಯಲ್ಲಿರುವ ದೇವಜನರಿಗೆ ಸಹಾಯವಾಗುವುದು. ಅಷ್ಟು
ಮಾತ್ರವೇ ಅಲ್ಲ, ಇದರಿಂದಾಗಿ ದೇವರಿಗೆ ಹೆಚ್ಚುಹೆಚ್ಚಾಗಿ
ಕೃತಜ್ಞತಾಸ್ತುತಿ ಉಂಟಾಗುವುದು. 13ನೀವು ಮಾಡುವ ಈ
ಸೇವಾಕಾರ್ಯವು ನಿಮ್ಮ ನಂಬಿಕೆಗೆ ಸಾಕ್ಷಿಯಾಗಿದೆ. ಇದರ
ನಿಮಿತ್ತವಾಗಿ ಜನರು ದೇವರಿಗೆ ಕೃತಜ್ಞತಾಸ್ತುತಿ ಮಾಡುವರು.
ನೀವು ಕ್ರಿಸ್ತನ ಸುವಾರ್ತೆಯನ್ನು ಅನುಸರಿಸುವುದರಿಂದ ಅವರು
ದೇವರಿಗೆ ಕೃತಜ್ಞತಾಸ್ತುತಿ ಮಾಡುವರು. ನೀವು ಹೇಳುವ
ಸುವಾರ್ತೆಯನ್ನು ನೀವು ನಂಬಿದ್ದೀರಿ. ತಮ್ಮೊಂದಿಗೆ ಮತ್ತು
ಎಲ್ಲರೊಂದಿಗೆ ನೀವು ಉದಾರವಾಗಿ ಹಂಚಿಕೊಂಡದ್ದರಿಂದ
ಜನರು ದೇವರಿಗೆ ಕೃತಜ್ಞತಾಸ್ತುತಿ ಮಾಡುವರು. 14ಇದಲ್ಲದೆ ಆ
ಜನರು ಪ್ರಾರ್ಥಿಸುವಾಗ ತಾವು ನಿಮ್ಮೊಂದಿಗೆ ಇರಬೇಕಾಗಿ
ತ್ತೆಂದು ಆಶಿಸುವರು. ದೇವರ ಅತಿಶಯವಾದ ಕೃಪೆಯು ನಿಮ್ಮಲ್ಲಿ
ರುವುದೇ ಅದಕ್ಕೆ ಕಾರಣ. 15ವರ್ಣಿಸಲಸಾಧ್ಯವಾದ ದೇವರ
ವರಕ್ಕಾಗಿ ಆತನಿಗೆ ಸ್ತೋತ್ರವಾಗಲಿ.

### ತನ್ನ ಸೇವೆಯ ಕುರಿತು ಪೌಲನ ಪ್ರತಿವಾದ

10 ಪೌಲನಾದ ನಾನು ಕ್ರಿಸ್ತನ ಮೃದುಸ್ವಭಾವದಿಂದಲೂ
ಕನಿಕರದಿಂದಲೂ ನಿಮ್ಮನ್ನು ಬೇಡಿಕೊಳ್ಳುತ್ತಿದ್ದೇನೆ.
ನಾನು ನಿಮ್ಮೊಂದಿಗಿರುವಾಗ ದೀನನಾಗಿರುತ್ತೇನೆಂದೂ,
ನಿಮ್ಮಿಂದ ದೂರದಲ್ಲಿರುವಾಗ ಧೀರನಾಗಿರುತ್ತೇನೆಂದೂ ಕೆಲ
ವರು ಹೇಳುತ್ತಾರೆ. 2ನಾವು ಲೌಕಿಕರಂತೆ ಜೀವಿಸುತ್ತೇವೆಂದು
ಕೆಲವರು ಯೋಚಿಸುತ್ತಾರೆ. ನಾನು ಬಂದಾಗ ಅವರ ವಿರೋಧ
ವಾಗಿ ಬಹು ದಿಟ್ಟತನದಿಂದಿರಬೇಕೆಂದು ಯೋಚಿಸಿಕೊಂಡಿ
ದ್ದೇನೆ. ಆದರೆ ನಿಮಗೂ ಅದೇ ದಿಟ್ಟತನವನ್ನು ಉಪಯೋಗಿ
ಸುವ ಅಗತ್ಯತೆ ಇಲ್ಲದಿರಲಿ ಎಂದು ನಿಮ್ಮನ್ನು ಬೇಡಿಕೊಳ್ಳು
ತ್ತಿದ್ದೇನೆ. 3ನಾವು ಪ್ರಪಂಚದಲ್ಲಿ ಜೀವಿಸುತ್ತಿದ್ದೇವೆ.ಆದರೆ;
ಪ್ರಪಂಚದವರು ಹೊಡೆದಾಡುವ ರೀತಿಯಲ್ಲಿ ಹೊಡೆದಾಡು
ವುದಿಲ್ಲ. 4ಪ್ರಪಂಚದವರು ಉಪಯೋಗಿಸುವ ಆಯುಧಗಳಿಗೆ
ತದ್ವಿರುದ್ಧವಾದ ಆಯುಧಗಳೊಂದಿಗೆ ನಾವು ಹೋರಾಡು
ತ್ತೇವೆ. ನಮ್ಮ ಆಯುಧಗಳು ದೇವರ ಶಕ್ತಿಯನ್ನು ಹೊಂದಿವೆ.
ಅವು ಶತ್ರುವಿನ ಬಲವಾದ ಕೋಟೆಗಳನ್ನು ನಾಶ ಮಾಡಬಲ್ಲವು.
ನಾವು ಜನರ ವಾದಗಳನ್ನು ನಾಶ ಮಾಡುತ್ತೇವೆ. 5ದೇವರ
ಜ್ಞಾನಕ್ಕೆ ವಿರೋಧವಾಗಿ ಎದ್ದೇಳುವ ಪ್ರತಿಯೊಂದು ಗರ್ವದ
ಸಂಗತಿಯನ್ನು ನಾಶಮಾಡುತ್ತೇವೆ; ಪ್ರತಿಯೊಂದು ಯೋಚನೆ
ಯನ್ನು ಸ್ವಾಧೀನಪಡಿಸಿಕೊಂಡು ಅವುಗಳನ್ನು ಪರಿವರ್ತಿಸಿ ಕ್ರಿಸ್ತ
ನಿಗೆ ವಿಧೇಯರಾಗುವಂತೆ ಮಾಡುತ್ತೇವೆ. 6ನಿಮ್ಮಲ್ಲಿ ಕ್ರಿಸ್ತನಿಗೆ
ವಿಧೇಯರಾಗದಿರುವ ಯಾರನ್ನೇ ಆಗಲಿ ಶಿಕ್ಷಿಸಲು ಸಿದ್ಧರಾಗಿ
ದ್ದೇವೆ. ಆದರೆ ಮೊಟ್ಟಮೊದಲನೆಯದಾಗಿ, ನೀವು ಪೂರ್ಣ
ವಿಧೇಯರಾಗಬೇಕೆಂದು ಅಪೇಕ್ಷಿಸುತ್ತೇವೆ. 7ನಿಮ್ಮ ಮುಂದಿ
ರುವ ನಿಜಾಂಶಗಳನ್ನು ನೀವು ಗಮನಿಸಬೇಕು. ಒಬ್ಬ ವ್ಯಕ್ತಿಯು
ತಾನು ನಿಜವಾಗಿಯೂ ಕ್ರಿಸ್ತನವನೆಂದು ತಿಳಿದುಕೊಂಡಿದ್ದರೆ
ಅವನಂತೆಯೇ ನಾವೂ ಕ್ರಿಸ್ತನವರೆಂಬುದನ್ನು ಅವನು ತಿಳಿದು
ಕೊಳ್ಳಬೇಕು. 8ಪ್ರಭುವು ನಮಗೆ ಕೊಟ್ಟಿರುವ ಅಧಿಕಾರದ ಬಗ್ಗೆ
ನಾವು ಹೆಚ್ಚು ಹೆಮ್ಮೆಪಡುತ್ತೇವೆ ಎಂಬುದೇನೋ ಸತ್ಯ. ಆದರೆ
ಆತನು ನಮಗೆ ಈ ಅಧಿಕಾರವನ್ನು ಕೊಟ್ಟಿರುವುದು ನಿಮ್ಮನ್ನು
ಬಲಪಡಿಸುವುದಕ್ಕಾಗಿಯೇ ಹೊರತು ನಿಮಗೆ ನೋವನ್ನು
ಉಂಟುಮಾಡುವದಕ್ಕಾಗಿಯಲ್ಲ. ಆದ್ದರಿಂದ ಅದರ ಬಗ್ಗೆ ಹೆಮ್ಮೆ
ಪಡುವುದರಲ್ಲಿ ನಾನು ನಾಚಿಕೊಳ್ಳುವುದಿಲ್ಲ. 9ನನ್ನ ಪತ್ರಗಳ
ಮೂಲಕ ನಿಮ್ಮನ್ನು ಭಯಪಡಿಸಲು ಪ್ರಯತ್ನಿಸುತ್ತಿದ್ದೇನೆಂದು
ನೀವು ಯೋಚಿಸಬೇಕೆಂಬುದು ನನ್ನ ಅಪೇಕ್ಷೆಯಲ್ಲ.
10‘‘ಪೌಲನ ಪತ್ರಗಳು ಬಲಯುತವಾಗಿವೆ ಮತ್ತು ಪ್ರಾಮುಖ್ಯ
ವಾಗಿವೆ: ಆದರೆ ಅವನು ನಮ್ಮೊಂದಿಗಿರುವಾಗ ಬಲಹೀನ
ನಾಗಿರುತ್ತಾನೆ, ಅವನ ಮಾತುಗಳು ನಿಸ್ಸಾರವಾಗಿರುತ್ತವೆ’’
ಎಂದು ಕೆಲವರು ಹೇಳುತ್ತಾರೆ. 11ಆ ಜನರಿಗೆ ಈ ವಿಷಯ
ತಿಳಿದಿರಬೇಕು. ಅದೇನೆಂದರೆ, ಈಗ ನಾವು ನಿಮ್ಮೊಂದಿಗಿಲ್ಲ.
ಆದ್ದರಿಂದ ಈ ಸಂಗತಿಗಳನ್ನು ಪತ್ರಗಳ ಮೂಲಕ ಹೇಳು
ತ್ತಿದ್ದೇವೆ. ಆದರೆ ನಾವು ನಿಮ್ಮೊಂದಿಗಿರುವಾಗ ನಮ್ಮ ಪತ್ರಗಳಲ್ಲಿ
ತೋರಿದ ಅಧಿಕಾರವನ್ನೇ ತೋರಿಸುತ್ತೇವೆ. 12ತಾವು ಬಹಳ
ಪ್ರಾಮುಖ್ಯವಾದವರೆಂದು ಯೋಚಿಸುವ ಆ ಜನರ ಗುಂಪಿ
ನೊಡನೆ ಸೇರಿಕೊಳ್ಳಲು ನಮಗೆ ಧೈರ್ಯಸಾಲದು. ನಾವು
ನಮ್ಮನ್ನು ಅವರೊಂದಿಗೆ ಹೋಲಿಸಿಕೊಳ್ಳುವುದಿಲ್ಲ. ಅವರು
ತಮ್ಮನ್ನು ಇತರರೊಂದಿಗೆ ಹೋಲಿಸಿಕೊಳ್ಳುತ್ತಾರೆ; ತಮ್ಮನ್ನು
ತಾವೇ ಮೌಲ್ಯಮಾಪನ ಮಾಡಿಕೊಳ್ಳುತ್ತಾರೆ. ಅವರಿಗೆ ಏನೂ
ಗೊತ್ತಿಲ್ಲವೆಂದು ಇದೇ ತೋರಿಸುತ್ತದೆ. 13ಆದರೆ ನಾವು ನಮಗೆ
ಕೊಡಲ್ಪಟ್ಟಿರುವ ಕೆಲಸದ ಮೇರೆಯನ್ನು ಮೀರಿ ನಮ್ಮನ್ನು
ಹೊಗಳಿಕೊಳ್ಳದೆ ದೇವರು ನಮಗೆ ಕೊಟ್ಟಿರುವ ಕೆಲಸದ
ಮೇರೆಯೊಳಗೆ ಹೆಮ್ಮೆಪಡುತ್ತೇವೆ. ಆದರೆ ನಮ್ಮ ಈ ಕೆಲಸವು
ನಿಮ್ಮ ಮಧ್ಯ ನಾವು ಮಾಡುವ ಈ ಸೇವೆಯನ್ನು ಒಳಗೊಂಡಿದೆ.
14ನಾವು ಬಹಳವಾಗಿ ಹೊಗಳಿಕೊಳ್ಳುವುದಿಲ್ಲ. ನಾವು ನಿಮ್ಮಲ್ಲಿ
ಈಗಾಗಲೇ ಬಂದಿಲ್ಲದಿದ್ದರೆ ಬಹಳವಾಗಿ ಹೊಗಳಿಕೊಳ್ಳು
ತ್ತಿದ್ದೆವು. ಆದರೆ ನಾವು ನಿಮ್ಮಲ್ಲಿಗೆ ಬಂದಿದ್ದೇವೆ. ಕ್ರಿಸ್ತನ ಸುವಾರ್ತೆ
ಯೊಂದಿಗೆ ನಾವು ಬಂದೆವು. 15ನಾವು ಹೊಗಳಿಕೊಳ್ಳುವುದನ್ನು
ನಮ್ಮ ಕೆಲಸದ ಮೇರೆಗೆ ಸೀಮಿತಗೊಳಿಸುತ್ತೇವೆ. ಇತರರು
ಮಾಡಿದ ಕೆಲಸದ ಬಗ್ಗೆ ನಾವು ನಮ್ಮನ್ನು ಹೊಗಳಿಕೊಳ್ಳು
ವುದಿಲ್ಲ. ನಿಮ್ಮ ನಂಬಿಕೆಯು ವೃದ್ಧಿಯಾಗುತ್ತಾ ಬಂದಂತೆ ನಮ್ಮ
ಕೆಲಸವು ಮತ್ತಷ್ಟು ವಿಶಾಲವಾಗಿ ಬೆಳೆಯಲು ನೀವು ಸಹಾಯ
ಮಾಡುತ್ತೀರೆಂಬ ನಿರೀಕ್ಷೆ ನಮಗಿದೆ. 16ನಿಮ್ಮ ಪಟ್ಟಣಕ್ಕೆ
ದೂರವಾಗಿರುವ ಸ್ಥಳಗಳಲ್ಲಿಯೂ ಸುವಾರ್ತೆಯನ್ನು ತಿಳಿಸ
ಬೇಕೆಂಬ ಅಪೇಕ್ಷೆ ನಮಗುಂಟು. ಮತ್ತೊಬ್ಬ ವ್ಯಕ್ತಿಯ ಪ್ರದೇಶ
ದಲ್ಲಿ ಈಗಾಗಲೇ ಮಾಡಲ್ಪಟ್ಟಿರುವ ಕೆಲಸದ ಬಗ್ಗೆ ಹೊಗಳಿ
ಕೊಳ್ಳಬೇಕೆಂಬ ಅಪೇಕ್ಷೆ ನಮಗಿಲ್ಲ. 17ಆದರೆ‘‘ ಹೊಗಳಿಕೊಳ್ಳು
ವವನು ಪ್ರಭುವಿನಲ್ಲಿಯೇ ಹೊಗಳಿಕೊಳ್ಳಬೇಕು’’*

---

**ಹೊಗಳಿಕೊಳ್ಳುವವನು … ಹೊಗಳಿಕೊಳ್ಳಬೇಕು** ಯೆರೆಮೀಯ 9:24.

18ಒಬ್ಬನು ತನ್ನನ್ನು ಒಳ್ಳೆಯವನೆಂದು ಹೇಳಿಕೊಂಡ ಮಾತ್ರಕ್ಕೆ
ಅವನು ಸ್ವೀಕೃತನೆಂದಲ್ಲ. ಪ್ರಭುವು ಯಾರನ್ನು ಒಳ್ಳೆಯವನೆಂದು
ಯೋಚಿಸುತ್ತಾನೊ ಅವನೇ ಸ್ವೀಕೃತನಾಗಿದ್ದಾನೆ.

### ಪೌಲನು ಮತ್ತು ಸುಳ್ಳು ಅಪೊಸ್ತಲರು

11 ನಾನು ಸ್ವಲ್ಪ ಬುದ್ಧಿಹೀನನಾಗಿರುವಾಗಲೂ ನೀವು ನನ್ನ
ವಿಷಯದಲ್ಲಿ ತಾಳ್ಮೆಯಿಂದಿರಬೇಕೆಂದು ಅಪೇಕ್ಷಿ
ಸುತ್ತೇನೆ. ಆದರೆ ನೀವು ಈಗಾಗಲೇ ನನ್ನ ವಿಷಯದಲ್ಲಿ
ತಾಳ್ಮೆಯಿಂದಿದ್ದೀರಿ. 2ನಿಮ್ಮ ವಿಷಯದಲ್ಲಿ ನಾನು ಚಿಂತಿಸುತ್ತೇನೆ.
ಈ ಚಿಂತೆಯು ದೇವರಿಂದ ಬಂದದ್ದು. ನಿಮ್ಮನ್ನು ಕೊಡುವು
ದಾಗಿ ನಾನು ಕ್ರಿಸ್ತನಿಗೆ ವಾಗ್ದಾನ ಮಾಡಿದೆನು. ಕ್ರಿಸ್ತನೊಬ್ಬನೇ
ನಿಮ್ಮ ಪತಿಯಾಗಿರಬೇಕು. ನಾನು ನಿಮ್ಮನ್ನು ಕ್ರಿಸ್ತನಿಗೆ ಆತನ
ಶುದ್ಧ ವಧುವನ್ನಾಗಿ ಕೊಡಲು ಅಪೇಕ್ಷಿಸುತ್ತೇನೆ. 3ಹವ್ವಳು
ಸರ್ಪದ ಕುಯುಕ್ತಿಯಿಂದ ಮೋಸಗೊಂಡಂತೆ ನಿಮ್ಮ ಮನಸ್ಸು
ಕ್ರಿಸ್ತನ ವಿಷಯದಲ್ಲಿ ಇರಬೇಕಾದ ಯಥಾರ್ಥತೆಯನ್ನೂ
ಪರಿಶುದ್ಧತೆಯನ್ನೂ ಬಿಟ್ಟು ಕೆಟ್ಟುಹೋದೀತೆಂಬ ಭಯ
ನನಗಿದೆ. 4ಯೇಸುವಿನ ಬಗ್ಗೆ ನಾವು ಬೋಧಿಸಿದ ಸಂಗತಿಗಳಿಗೆ
ಭಿನ್ನವಾದಂಥ ಸಂಗತಿಗಳನ್ನು ಬೋಧಿಸುವ ಬೋಧಕರು ನಿಮ್ಮ
ಬಳಿಗೆ ಬಂದು ಬೋಧಿಸಿದರೂ ನೀವು ತಾಳ್ಮೆಯಿಂದಿರುತ್ತೀರಿ.
ನೀವು ನಮ್ಮಿಂದ ಸ್ವೀಕರಿಸಿಕೊಂಡ ಪವಿತ್ರಾತ್ಮನಿಗೂ
ಸುವಾರ್ತೆಗೂ ಭಿನ್ನವಾದ ಆತ್ಮವನ್ನೂ ಸುವಾರ್ತೆಯನ್ನೂ
ಸ್ವೀಕರಿಸಿಕೊಳ್ಳಲು ಬಹು ಇಷ್ಟವುಳ್ಳವರಾಗಿದ್ದೀರಿ. ಆದ್ದರಿಂದ
ನೀವು ನಮ್ಮ ವಿಷಯದಲ್ಲಿ ತಾಳ್ಮೆಯಿಂದಿರಬೇಕು. 5ಆ
''ಮಹಾಅಪೊಸ್ತಲರು'' ನನಗಿಂತ ಮಿಗಿಲಾದವರೆಂದು ನಾನು
ಭಾವಿಸುವುದಿಲ್ಲ. 6ನಾನು ತರಬೇತಿ ಹೊಂದಿದ ಭಾಷಣ
ಗಾರನಲ್ಲ ಎಂಬುದೇನೊ ನಿಜ, ಆದರೆ ನನಗೂ ಜ್ಞಾನವಿದೆ.
ಇದನ್ನು ನಿಮಗೆ ಪ್ರತಿಯೊಂದು ವಿಧದಲ್ಲಿಯೂ ಸ್ಪಷ್ಟವಾಗಿ
ತೋರಿಸಿದೆವು. 7ನಾನು ನಿಮಗೆ ದೇವರ ಸುವಾರ್ತೆಯನ್ನು
ಉಚಿತವಾಗಿ ಬೋಧಿಸಿದೆನು. ನಿಮ್ಮನ್ನು ಪ್ರಮುಖರನ್ನಾಗಿ
ಮಾಡಲು ನನ್ನನ್ನು ತಗ್ಗಿಸಿಕೊಂಡೆನು. ಅದು ತಪ್ಪೆಂದು
ಭಾವಿಸುತ್ತೀರೋ? 8ನಾನು ಇತರ ಸಭೆಗಳಿಂದ ನಿಮ್ಮ
ಮಧ್ಯದಲ್ಲಿ ಸೇವೆ ಮಾಡುವುದಕ್ಕಾಗಿ ಹಣವನ್ನು ತೆಗೆದು
ಕೊಂಡೆನು. 9ನಾನು ನಿಮ್ಮಲ್ಲಿದ್ದಾಗ ನನ್ನ ಯಾವ ಕೊರತೆ
ಯಲ್ಲಿಯೂ ನಿಮಗೆ ತೊಂದರೆ ಕೊಡಲಿಲ್ಲ. ಮಕೆದೋನಿಯ
ದಿಂದ ಬಂದಿದ್ದ ಸಹೋದರರು ನನಗೆ ಬೇಕಾಗಿದ್ದದ್ದನ್ನೆಲ್ಲ
ಕೊಟ್ಟರು. ನಾನು ನಿಮಗೆ ಯಾವ ರೀತಿಯಲ್ಲಿಯೂ ಭಾರವಾಗ
ದಂತೆ ನೋಡಿಕೊಂಡೆನು. ಇನ್ನು ಮುಂದೆಯೂ ನಾನು ನಿಮಗೆ
ಭಾರವಾಗಿರುವುದಿಲ್ಲ. 10ಈ ವಿಷಯದಲ್ಲಿ ನಾನು ಹೆಮ್ಮೆಪಡು
ವುದನ್ನು ಅಖಾಯದಲ್ಲಿರುವ ಯಾರೂ ನಿಲ್ಲಿಸಲಾರರು. ಕ್ರಿಸ್ತನ
ಸತ್ಯವು ನನ್ನೊಳಗಿರುವುದರಿಂದ ಇದನ್ನು ಹೇಳುತ್ತಿದ್ದೇನೆ.
11ನಾನು ನಿಮಗೆ ಭಾರವಾಗದಿರುವುದು ನಿಮ್ಮ ಮೇಲೆ ನನಗೆ
ಪ್ರೀತಿಯಿಲ್ಲದಿರುವ ಕಾರಣದಿಂದಲೋ? ಇಲ್ಲ! ನಾನು
ನಿಮ್ಮನ್ನು ಪ್ರೀತಿಸುತ್ತೇನೆಂದು ದೇವರಿಗೆ ಗೊತ್ತಿದೆ. 12ಈಗ
ನಾನು ಮಾಡುತ್ತಿರುವುದನ್ನು ಮುಂದುವರೆಸುತ್ತೇನೆ. ಆ ಜನರಿಗೆ
ಹೊಗಳಿಕೊಳ್ಳಲು ಯಾವ ಕಾರಣವೂ ಸಿಕ್ಕಬಾರದೆಂದು ಇದನ್ನು
ಮುಂದುವರಿಸುತ್ತೇನೆ. ಅವರು ತಮ್ಮ ಕೆಲಸದ ಬಗ್ಗೆ ಜಂಬ
ಪಡುತ್ತಾರೆ. ತಾವು ಮಾಡುವ ಆ ಕೆಲಸವು ನಮ್ಮ ಕೆಲಸದಂತೆಯೇ
ಇದೆಯೆಂದು ಹೇಳಿಕೊಳ್ಳಲು ಬಯಸುತ್ತಾರೆ. 13ಇವರು ನಿಜ
ಅಪೊಸ್ತಲರಲ್ಲ.* ಅವರು ಮೋಸಗಾರರಾದ ಕೆಲಸಗಾರರು.
ತಾವು ಕ್ರಿಸ್ತನ ಅಪೊಸ್ತಲರಲ್ಲದಿದ್ದರೂ ಜನರು ತಮ್ಮನ್ನು ಕ್ರಿಸ್ತನ
ಅಪೊಸ್ತಲರೆಂದು ತಿಳಿದುಕೊಳ್ಳುವಂತೆ ನಟಿಸುತ್ತಾರೆ. 14ಇದು
ನಮಗೆ ಆಶ್ಚರ್ಯವಾದದ್ದೇನೂ ಅಲ್ಲ. ಏಕೆಂದರೆ ಸೈತಾನನು
ತಾನೇ ಪ್ರಕಾಶರೂಪವುಳ್ಳ ದೇವದೂತನ ವೇಷವನ್ನು ಹಾಕಿ
ಕೊಳ್ಳುತ್ತಾನೆ. 15ಹೀಗಿರಲು ಸೈತಾನನ ಸೇವಕರು ತಾವು
ಸರಿಯಾದ ಕೆಲಸವನ್ನು ಮಾಡುತ್ತಿರುವವರಂತೆ ನಟಿಸುವುದರಲ್ಲಿ
ಆಶ್ಚರ್ಯವೇನೂ ಇಲ್ಲ. ಆದರೆ ಅವರು ಮಾಡುತ್ತಿರುವ
ಕೆಲಸಗಳ ಪ್ರತಿಫಲವಾಗಿ ಅವರಿಗೆ ಕೊನೆಯಲ್ಲಿ ದಂಡನೆ
ಯಾಗುವುದು.

### ಪೌಲನು ತನಗಾದ ಹಿಂಸೆಯ ಬಗ್ಗೆ ತಿಳಿಸುವನು

16ನಾನು ನಿಮಗೆ ಮತ್ತೆ ಹೇಳುವುದೇನಂದರೆ, ನನ್ನನ್ನು
ಬುದ್ಧಿಹೀನನೆಂದು ಯಾರೂ ಯೋಚಿಸಕೂಡದು. ಬುದ್ಧಿಹೀನ
ನೆಂದು ನೀವು ಯೋಚಿಸುವುದಾಗಿದ್ದರೆ, ನೀವು ಬುದ್ಧಿಹೀನ
ನನ್ನು ಸ್ವೀಕರಿಸಿಕೊಳ್ಳುವಂತೆ ನನ್ನನ್ನು ಸ್ವೀಕರಿಸಿಕೊಳ್ಳಿರಿ. ಆಗ
ನಾನು ಸ್ವಲ್ಪ ಹೆಮ್ಮೆಪಡಲು ಸಾಧ್ಯವಾಗುವುದು. 17ನನಗೆ ನನ್ನ
ವಿಷಯದಲ್ಲಿ ಭರವಸೆ ಇರುವುದರಿಂದ ನಾನು ಹೊಗಳಿ
ಕೊಳ್ಳುತ್ತೇನೆ. ಆದರೆ ಪ್ರಭು ಮಾತಾಡುವಂತೆ ನಾನು ಮಾತಾಡು
ತ್ತಿಲ್ಲ. ನಾನು ಬುದ್ಧಿಹೀನನೆಂದು ಹೊಗಳಿಕೊಳ್ಳುತ್ತಿದ್ದೇನೆ.
18ಅನೇಕ ಜನರು ತಮ್ಮ ಪ್ರಾಪಂಚಿಕ ಜೀವನದ ಬಗ್ಗೆ ಹೊಗಳಿ
ಕೊಳ್ಳುತ್ತಿದ್ದಾರೆ. ಆದ್ದರಿಂದ ನಾನು ಸಹ ಹೊಗಳಿಕೊಳ್ಳುತ್ತೇನೆ.
19ನೀವು ಬುದ್ಧಿವಂತರಾಗಿರುವುದರಿಂದ ಬುದ್ಧಿಹೀನರ ವಿಷಯ
ದಲ್ಲಿ ಸಂತೋಷದಿಂದ ತಾಳ್ಮೆಯಿಂದಿರುತ್ತೀರಿ. 20ಏಕೆಂದರೆ
ನಿಮ್ಮಿಂದ ಬಲವಂತವಾಗಿ ಕೆಲಸ ಮಾಡಿಸಿಕೊಳ್ಳುವವನ ಮತ್ತು
ನಿಮ್ಮನ್ನು ಉಪಯೋಗಿಸಿಕೊಳ್ಳುವವನ ವಿಷಯದಲ್ಲಿಯೂ ಸಹ
ತಾಳ್ಮೆಯಿಂದಿರುತ್ತೀರಿ. ನಿಮ್ಮನ್ನು ಮೋಸಗೊಳಿಸುವವರ,
ತಮ್ಮನ್ನು ನಿಮಗಿಂಥ ಉತ್ತಮರೆಂದು ಭಾವಿಸಿಕೊಂಡಿರುವವರ
ಮತ್ತು ನಿಮ್ಮ ಮುಖದ ಮೇಲೆ ಹೊಡೆಯುವವರ ವಿಷಯ
ದಲ್ಲಿಯೂ ನೀವು ತಾಳ್ಮೆಯಿಂದಿರುತ್ತೀರಿ. 21ಇದನ್ನು ಹೇಳು
ವುದಕ್ಕೇ ನಾಚಿಕೆಯಾಗುತ್ತದೆ. ಆದರೆ, ನಿಮ್ಮೊಂದಿಗೆ ಆ ರೀತಿ
ನಡೆದುಕೊಳ್ಳುವಷ್ಟು ''ಬಲ'' ನಮಗಿರಲಿಲ್ಲ! ಆದರೆ ಹೊಗಳಿ
ಕೊಳ್ಳಲು ಯಾರಿಗಾದರೂ ಸಾಕಷ್ಟು ಧೈರ್ಯವಿದ್ದರೆ ನಾನು ಸಹ
ಧೈರ್ಯದಿಂದ ಹೊಗಳಿಕೊಳ್ಳುತ್ತೇನೆ. (ನಾನು ಬುದ್ಧಿಹೀನನಂತೆ
ಮಾತಾಡುತ್ತಿದ್ದೇನೆ.) 22ಆ ಜನರು ಇಬ್ರಿಯರೇ? ನಾನು ಸಹ
ಇಬ್ರಿಯನು. ಅವರು ಇಸ್ರೇಲರೇ? ನಾನು ಸಹ ಇಸ್ರೇಲನು.
ಅವರು ಅಬ್ರಹಾಮನ ಕುಟುಂಬಕ್ಕೆ ಸೇರಿದವರೇ? ನಾನು ಸಹ
ಅಬ್ರಹಾಮನ ಕುಟುಂಬಕ್ಕೆ ಸೇರಿದವನು. 23ಅವರು ಕ್ರಿಸ್ತನ
ಸೇವೆ ಮಾಡುತ್ತಿದ್ದಾರೋ? ನಾನು ಸಹ ಅವರಿಗಿಂತಲೂ
ಹೆಚ್ಚಾಗಿ ಸೇವೆಮಾಡುತ್ತಿದ್ದೇನೆ. (ನಾನು ಹುಚ್ಚನಂತೆ ಹೀಗೆ
ಮಾತಾಡುತ್ತಿದ್ದೇನೆ.) ನಾನು ಅವರಿಗಿಂತಲೂ ಹೆಚ್ಚು ಕಷ್ಟಪಟ್ಟು
ದುಡಿದಿದ್ದೇನೆ; ಹೆಚ್ಚು ಸಲ ಸೆರೆಮನೆಯಲ್ಲಿದ್ದೆನು. ಹೆಚ್ಚು
ಏಟುಗಳನ್ನು ತಿಂದಿದ್ದೇನೆ, ನಾನು ಅನೇಕ ಸಲ ಮರಣದ

---

**ನಿಜಅಪೊಸ್ತಲರಲ್ಲ** ಕ್ರಿಸ್ತನು ತನಗಾಗಿ ಆರಿಸಿಕೊಂಡ ವಿಶೇಷ
ಸಹಾಯಕರಲ್ಲ.

ಸಮೀಪದಲ್ಲಿದ್ದೆನು. 24ಚಾವಟಿಯಿಂದ ಮೂವತ್ತೊಂಭತ್ತು
ಏಟುಗಳನ್ನು ಹೊಡೆಯಿಸಿಕೊಳ್ಳುವ ಶಿಕ್ಷೆಯನ್ನು ಯೆಹೂದಿ
ಯರು ನನಗೆ ಐದು ಸಲ ವಿಧಿಸಿದರು. 25ಮೂರು ಸಲ ಕಬ್ಬಿಣದ
ಸರಳುಗಳಿಂದ ಏಟನ್ನು ತಿಂದಿದ್ದೇನೆ. ಒಂದು ಸಲ ಕಲ್ಲೆಸೆದು
ನನ್ನನ್ನು ಅರೆಜೀವ ಮಾಡಿದರು. ಮೂರು ಸಲ ನಾನಿದ್ದ
ಹಡಗುಗಳು ಒಡೆದುಹೋದವು. ಒಮ್ಮೆ,ಒಂದು ರಾತ್ರಿ ಒಂದು
ಹಗಲು ಸಮುದ್ರದ ನೀರಿನಲ್ಲಿರಬೇಕಾಯಿತು. 26ಅನೇಕ
ಪ್ರಯಾಣಗಳನ್ನು ಮಾಡಿದೆನು. ನದಿಗಳಿಂದಲೂ ಕಳ್ಳರಿಂದಲೂ
ನನ್ನ ಸ್ವಂತ ಜನರಾದ ಯೆಹೂದ್ಯರಿಂದಲೂ ಮತ್ತು ಯೆಹೂದ್ಯ
ರಲ್ಲದವರಿಂದಲೂ ಅಪಾಯಕ್ಕೀಡಾಗಿದ್ದೆನು. ಪಟ್ಟಣ
ಗಳಲ್ಲಿಯೂ ಜನರು ವಾಸವಾಗಿಲ್ಲದ ಸ್ಥಳಗಳಲ್ಲಿಯೂ ಸಮುದ್ರ
ಗಳಲ್ಲಿಯೂ ಸುಳ್ಳುಸಹೋದರರ ಮಧ್ಯದಲ್ಲಿಯೂ ಅಪಾಯ
ಕ್ಕೀಡಾಗಿದ್ದೆನು. 27ಕಷ್ಟಕರವಾದ ಮತ್ತು ಅಪಾಯಕರವಾದ
ಕೆಲಸಗಳನ್ನು ಮಾಡಿದ್ದೇನೆ. ಕೆಲವು ಸಲ ನಿದ್ರಿಸಲೂ ಇಲ್ಲ. ಹಸಿವೆ
ಬಾಯಾರಿಕೆಗಳಿಂದ ಕಷ್ಟಪಟ್ಟಿದ್ದೇನೆ. ಅನೇಕಸಲ ನನಗೆ ಊಟ
ಇರಲಿಲ್ಲ. ಚಳಿಯಿಂದ ನಡುಗುತ್ತಿದ್ದರೂ ಬಟ್ಟೆಯಿರಲಿಲ್ಲ.
28ಹೀಗೆ ನಾನು ಇನ್ನೂ ಅನೇಕ ಸಮಸ್ಯೆಗಳನ್ನು ಎದುರಿಸಿದ್ದೇನೆ.
ಎಲ್ಲಾ ಸಭೆಗಳ ಮೇಲೆ ನನಗಿರುವ ಚಿಂತೆಯೂ ಇವುಗಳಲ್ಲಿ
ಒಂದು. ನಾನು ಪ್ರತಿನಿತ್ಯ ಅವುಗಳ ಬಗ್ಗೆ ಚಿಂತಿಸುತ್ತೇನೆ.
29ಯಾವನಾದರೂ ಬಲಹೀನನಾಗಿರುವಾಗ ನಾನೂ ಬಲಹೀನ
ನಾಗಿರುತ್ತೇನೆ. ಯಾವನಾದರೂ ಪಾಪದಲ್ಲಿ ನಡೆಸಲ್ಪಟ್ಟರೆ
ನನ್ನೊಳಗೆ ಕೋಪಗೊಳ್ಳುತ್ತೇನೆ. 30ಹೊಗಳಿಕೊಳ್ಳಬೇಕಾದರೆ,
ನನ್ನನ್ನು ಬಲಹೀನನೆಂದು ತೋರಿಸುವ ಸಂಗತಿಗಳ ಬಗ್ಗೆ
ಹೊಗಳಿಕೊಳ್ಳುತ್ತೇನೆ. 31ನಾನು ಸುಳ್ಳುಹೇಳುತ್ತಿಲ್ಲವೆಂದು
ದೇವರಿಗೆ ಗೊತ್ತಿದೆ. ಆತನು ಪ್ರಭು ಯೇಸು ಕ್ರಿಸ್ತನ ದೇವರೂ
ತಂದೆಯೂ ಆಗಿದ್ದಾನೆ. ಆತನಿಗೆ ಸದಾಕಾಲ ಸ್ತೋತ್ರ ಸಲ್ಲಿಸ
ಬೇಕು. 32ನಾನು ದಮಸ್ಕದಲ್ಲಿದ್ದಾಗ ರಾಜನಾದ ಅರೇತನ
ಅಧೀನದಲ್ಲಿದ್ದ ರಾಜ್ಯಪಾಲನು ನನ್ನನ್ನು ಬಂಧಿಸಬೇಕೆಂದಿ
ದ್ದನು. ಅವನು ಪಟ್ಟಣದ ಸುತ್ತಲೂ ಕಾವಲುಗಾರರನ್ನು ನಿಲ್ಲಿಸಿ
ದನು. 33ಆದರೆ ನನ್ನ ಕೆಲವು ಸ್ನೇಹಿತರು ನನ್ನನ್ನು ಬುಟ್ಟಿಯೊಳಗೆ
ಕುಳ್ಳಿರಿಸಿ, ಗೋಡೆಯ ಕಿಟಿಕಿಯೊಳಗಿಂದ ಕೆಳಗಿಳಿಸಿದರು. ಹೀಗೆ
ನಾನು ರಾಜ್ಯಪಾಲನಿಂದ ತಪ್ಪಿಸಿಕೊಂಡೆನು.

### ಪೌಲನ ಜೀವಿತದಲ್ಲಾದ ವಿಶೇಷ ಆಶೀರ್ವಾದ

12 ಹೊಗಳಿಕೊಳ್ಳುವುದು ಹಿತಕರವಲ್ಲ. ಆದರೂ ನನಗೆ
ಅವಶ್ಯವಾಗಿದೆ. ಆದುದರಿಂದ ನನಗೆ ಪ್ರಭುವಿ
ನಿಂದಾದ ದರ್ಶನಗಳ ಮತ್ತು ಪ್ರಕಟಣೆಗಳ ಬಗ್ಗೆ ಹೇಳುತ್ತೇನೆ.
2ಮೂರನೆಯ ಆಕಾಶಕ್ಕೆ ಒಯ್ಯಲ್ಪಟ್ಟಿದ್ದ ಒಬ್ಬ ವ್ಯಕ್ತಿಯನ್ನು
ನಾನು ಬಲ್ಲೆನು. ಇದು ಸಂಭವಿಸಿ ಹದಿನಾಲ್ಕು ವರ್ಷಗಳಾದವು.
ಆ ವ್ಯಕ್ತಿಯು ದೇಹಸಹಿತವಾಗಿ ಹೋಗಿದ್ದನೊ ಅಥವಾ ದೇಹ
ರಹಿತನಾಗಿ ಹೋಗಿದ್ದನೊ ನನಗೆ ಗೊತ್ತಿಲ್ಲ. ದೇವರಿಗೆ ಗೊತ್ತು.
3-4ಈ ವ್ಯಕ್ತಿಯು ಪರದೈಸಿಗೆ ಒಯ್ಯಲ್ಪಟ್ಟದ್ದು ನನಗೆ ಗೊತ್ತಿದೆ.
ಅವನು ನುಡಿಯಲಶಕ್ಯವಾದ ಮತ್ತು ಹೇಳಕೂಡದಂಥ ಮಾತು
ಗಳನ್ನು ಕೇಳಿದನು. 5ಅಂಥವನ ಬಗ್ಗೆ ನಾನು ಹೊಗಳಿಕೊಳ್ಳು
ತ್ತೇನೆ. ಆದರೆ ನನ್ನ ಬಗ್ಗೆ ಹೊಗಳಿಕೊಳ್ಳದೆ, ನನ್ನ ಬಲಹೀನತೆಗಳ
ಬಗ್ಗೆ ಹೊಗಳಿಕೊಳ್ಳುತ್ತೇನೆ. 6ನನ್ನ ಬಗ್ಗೆ ಹೊಗಳಿಕೊಳ್ಳ
ಬೇಕೆಂದಿದ್ದರೂ ಬುದ್ಧಿಹೀನನಾಗುವುದಿಲ್ಲ. ಏಕೆಂದರೆ ಸತ್ಯ
ವನ್ನೇ ಹೇಳುತ್ತೇನೆ. ಆದರೆ ನನ್ನ ಬಗ್ಗೆ ಹೊಗಳಿಕೊಳ್ಳುವುದಿಲ್ಲ.
ಏಕೆಂದರೆ ಜನರು ನನ್ನಲ್ಲಿ ನೋಡುವುದಕ್ಕಿಂತಲೂ ನನ್ನಿಂದ
ಕೇಳುವುದಕ್ಕಿಂತಲೂ ಹೆಚ್ಚಾಗಿ ನನ್ನ ಬಗ್ಗೆ ಯೋಚಿಸುವುದು
ನನಗೆ ಇಷ್ಟವಿಲ್ಲ. 7ಆದರೆ ನನಗೆ ತೋರಿಸಲ್ಪಟ್ಟ ಆಶ್ಚರ್ಯ
ಕರವಾದ ಸಂಗತಿಗಳ ಬಗ್ಗೆ ನಾನು ಬಹು ಹೆಮ್ಮೆಪಡಕೂಡದು.
ಆದ್ದರಿಂದಲೇ ಬಾಧೆಯ ಸಮಸ್ಯೆಯೊಂದು ನನಗೆ
ಕೊಡಲ್ಪಟ್ಟಿತು. ಸೈತಾನನಿಂದ ಬಂದ ದೂತನೇ ಈ ಸಮಸ್ಯೆ.
ಬಹಳವಾಗಿ ಹೆಮ್ಮೆಪಡದಂತೆ ನನ್ನನ್ನು ಹೊಡೆಯುವುದಕ್ಕಾಗಿ
ಅದನ್ನು ಕಳುಹಿಸಲಾಗಿತ್ತು. 8ನನ್ನಿಂದ ಅದನ್ನು ತೆಗೆದುಹಾಕ
ಬೇಕೆಂದು ನಾನು ಮೂರು ಸಲ ಪ್ರಭುವನ್ನು ಬೇಡಿಕೊಂಡೆನು.
9ಆದರೆ ಪ್ರಭುವು ನನಗೆ, ‘‘ನನ್ನ ಕೃಪೆಯೇ ನಿನಗೆ ಸಾಕು, ನೀನು
ಬಲಹೀನನಾಗಿರುವಾಗ ನನ್ನ ಶಕ್ತಿಯು ನಿನ್ನಲ್ಲಿ ಪರಿಪೂರ್ಣ
ವಾಗಿರುತ್ತದೆ’’ ಎಂದು ಹೇಳಿದನು. 10ಆದ್ದರಿಂದ ನನ್ನಲ್ಲಿ ಬಲ
ಹೀನತೆಗಳಿರುವಾಗ, ಜನರು ನನ್ನ ಬಗ್ಗೆ ಕೆಟ್ಟಸಂಗತಿಗಳನ್ನು
ಹೇಳುವಾಗ, ಜನರು ನನ್ನನ್ನು ಹಿಂಸಿಸುವಾಗ, ನನಗೆ ಸಮಸ್ಯೆ
ಗಳಿರುವಾಗ ಸಂತೋಷಿಸುತ್ತೇನೆ. ಇವುಗಳೆಲ್ಲಾ ಕ್ರಿಸ್ತನಿಗೋಸ್ಕರ
ವಾಗಿಯೇ. ಇವುಗಳ ಬಗ್ಗೆ ಸಂತೋಷಪಡುತ್ತೇನೆ, ಏಕೆಂದರೆ
ಬಲಹೀನನಾಗಿರುವಾಗಲೇ ನಿಜವಾಗಿಯೂ ಶಕ್ತಿಶಾಲಿ
ಯಾಗಿರುತ್ತೇನೆ.

### ಕೊರಿಂಥದ ಕ್ರೈಸ್ತರ ಮೇಲೆ ಪೌಲನಿಗಿರುವ ಪ್ರೀತಿ

11ನಾನು ಬುದ್ಧಿಹೀನನಂತೆ ಮಾತಾಡುತ್ತಿದ್ದೇನೆ. ಅದಕ್ಕೆ
ನೀವೇ ಕಾರಣರು. ನೀವೇ ನನ್ನ ಬಗ್ಗೆ ಒಳ್ಳೆಯ ಸಂಗತಿಗಳನ್ನು
ಹೇಳಬೇಕು.ನನಗೆ ಯಾವ ಬೆಲೆಯೂ ಇಲ್ಲ. ನಾನು ಕೇವಲ
ಅಲ್ಪನಾಗಿದ್ದೇನೆ, ಆದರೆ ಆ ‘‘ಮಹಾಅಪೊಸ್ತಲರು’’ ನನಗಿಂತ
ಯಾವುದರಲ್ಲಿಯೂ ಮಿಗಿಲಾಗಿಲ್ಲ. 12ನಾನು ನಿಮ್ಮೊಂದಿ
ಗಿದ್ದಾಗ ನಾನೂ ಅಪೊಸ್ತಲನೆಂಬುದನ್ನು ನಿರೂಪಿಸುವಂಥ
ಸೂಚಕ ಕಾರ್ಯಗಳನ್ನು, ಆಶ್ಚರ್ಯಕರವಾದ ಕಾರ್ಯಗಳನ್ನು,
ಅದ್ಭುತಕಾರ್ಯಗಳನ್ನು ಮಾಡಿದೆನು. 13ನಾನು ಈ ಕಾರ್ಯ
ಗಳನ್ನು ಬಹು ತಾಳ್ಮೆಯಿಂದ ಮಾಡಿದೆನು. ಆದ್ದರಿಂದ ಇತರ
ಸಭೆಗಳಿಗೆ ದೊರೆತವುಗಳೆಲ್ಲ ನಿಮಗೂ ದೊರೆತವು. ಒಂದೇ
ಒಂದು ವ್ಯತ್ಯಾಸವೇನಂದರೆ, ನಾನು ನಿಮಗೆ ಭಾರವಾಗಿರಲಿಲ್ಲ.
ಈ ವಿಷಯದಲ್ಲಿ ನನ್ನನ್ನು ಕ್ಷಮಿಸಿರಿ. 14ಈಗ ನಿಮ್ಮನ್ನು ಮೂರನೆ
ಸಲ ಸಂದರ್ಶಿಸಲು ಸಿದ್ಧನಾಗಿದ್ದೇನೆ, ಆದರೆ ನಾನು ನಿಮಗೆ
ಭಾರವಾಗಿರುವುದಿಲ್ಲ. ನಿಮ್ಮ ಸ್ವತ್ತುಗಳಲ್ಲಿ ಯಾವುದೂ ನನಗೆ
ಬೇಕಾಗಿಲ್ಲ. ನನಗೆ ಬೇಕಾಗಿರುವುದು ನೀವೇ. ಮಕ್ಕಳು ತಂದೆ
ತಾಯಿಗಳಿಗೋಸ್ಕರ ಹಣವನ್ನು ಉಳಿಸಿ ಕೊಡಬೇಕಾಗಿಲ್ಲ.
ತಂದೆತಾಯಿಗಳು ಹಣವನ್ನು ಉಳಿಸಿ ಮಕ್ಕಳಿಗೆ ಕೊಡಬೇಕು.
15ಆದ್ದರಿಂದ ನನ್ನಲ್ಲಿರುವುದನ್ನೆಲ್ಲಾ ನಿಮಗೆ ಕೊಡಲು
ಸಂತೋಷಿಸುತ್ತೇನೆ. ನನ್ನನ್ನೇ ನಿಮಗೆ ಕೊಟ್ಟುಬಿಡುತ್ತೇನೆ.
ನಾನು ನಿಮ್ಮನ್ನು ಬಹಳವಾಗಿ ಪ್ರೀತಿಸಿದರೆ, ನೀವು ನನ್ನನ್ನು
ಕಡಿಮೆಯಾಗಿ ಪ್ರೀತಿಸುವಿರೋ? 16ನಾನು ನಿಮಗೆ
ಭಾರವಾಗಿರಲಿಲ್ಲ ಎಂಬುದು ಸ್ಪಷ್ಟವಾಗಿದೆ. ಸುಳ್ಳು ಹೇಳಿ
ಕುತಂತ್ರದಿಂದ ನಿಮ್ಮನ್ನು ಬಲೆಗೆ ಬೀಳಿಸುವವನಾಗಿದ್ದೇನೆಂದು
ನೀವು ಯೋಚಿಸಿಕೊಂಡಿದ್ದೀರಿ. 17ನಾನು ನಿಮ್ಮ ಬಳಿಗೆ
ಕಳುಹಿಸಿದ ಜನರಲ್ಲಿ ಯಾರ ಮೂಲಕವಾದರೂ ನಿಮ್ಮನ್ನು
ಮೋಸಗೊಳಿಸಿದೆನೇ? ಇಲ್ಲ! ನಾನು ಮೋಸಗೊಳಿಸಲಿಲ್ಲ

ಎಂಬುದು ನಿಮಗೆ ಗೊತ್ತಿದೆ. 18ನಿಮ್ಮ ಬಳಿಗೆ ಹೋಗಬೇಕೆಂದು
ತೀತನನ್ನು ಕೇಳಿಕೊಂಡೆನು. ಅಲ್ಲದೆ ನಮ್ಮ ಸಹೋದರನನ್ನು
ಅವನೊಂದಿಗೆ ಕಳುಹಿಸಿದೆನು. ಅವನು ನಿಮ್ಮನ್ನು ಮೋಸ
ಗೊಳಿಸಲಿಲ್ಲ. ಅವನು ಮೋಸ ಮಾಡಿದನೇ? ಇಲ್ಲ! ಅವನು
ಮತ್ತು ನಾನು ಒಂದೇ ಆತ್ಮನಿಂದ ಪ್ರೇರಿತರಾಗಿ ಒಂದೇ
ರೀತಿಯಲ್ಲಿ ನಡೆದುಕೊಂಡೆವು. 19ಈವರೆಗೂ ನಾವು
ನಿಮ್ಮೊಂದಿಗೆ ನಮ್ಮ ಬಗ್ಗೆ ಸಮರ್ಥಿಸಿಕೊಳ್ಳುತ್ತಿದ್ದೇವೆಂದು
ಭಾವಿಸುತ್ತೀರೋ? ಇಲ್ಲ! ನಾವು ಕ್ರಿಸ್ತನಲ್ಲಿ ಈ ಸಂಗತಿಗಳನ್ನು
ಹೇಳುತ್ತೇವೆ. ನಾವು ದೇವರ ಮುಂದೆ ಈ ಸಂಗತಿಗಳನ್ನು
ಹೇಳುತ್ತಿದ್ದೇವೆ. ನೀವು ನಮ್ಮ ಪ್ರಿಯ ಸ್ನೇಹಿತರು. ನಾವು
ಮಾಡುವ ಪ್ರತಿಯೊಂದು ನಿಮ್ಮನ್ನು ಮತ್ತಷ್ಟು ಬಲಿಷ್ಠರನ್ನಾಗಿ
ಮಾಡುವುದಕ್ಕಾಗಿ. 20ಕಾರಣವೇನಂದರೆ, ನಾನು ಬಂದಾಗ ನನ್ನ
ಅಪೇಕ್ಷೆಗೆ ತಕ್ಕಂತೆ ನೀವು ಇರುವುದಿಲ್ಲವೆಂಬ ಭಯ ನನಗಿದೆ.
ನಿಮ್ಮ ಸಭೆಯಲ್ಲಿ ವಾದ, ಹೊಟ್ಟೆಕಿಚ್ಚು, ಕೋಪ, ಸ್ವಾರ್ಥ
ಪರವಾದ ಹೋರಾಟ, ಕೆಟ್ಟಮಾತು, ಸುಳ್ಳುಸುದ್ದಿ, ಗರ್ವ ಮತ್ತು
ಗಲಿಬಿಲಿ ಇರಬಹುದೆಂಬ ಭಯ ನನಗಿದೆ. 21ನಾನು ನಿಮ್ಮ
ಬಳಿಗೆ ಮತ್ತೆ ಬಂದಾಗ ನನ್ನ ದೇವರು ನನ್ನನ್ನು ನಿಮ್ಮ ಮುಂದೆ
ದೀನನನ್ನಾಗಿ ಮಾಡಬಹುದೆಂಬ ಭಯವಿದೆ. ನಿಮ್ಮಲ್ಲಿ ಪಾಪಕ್ಕೆ
ಒಳಗಾಗಿರುವ ಅನೇಕರಿಂದ ನಾನು ದುಃಖಿತನಾಗಬಹುದು.
ಏಕೆಂದರೆ, ಆ ಜನರು ತಮ್ಮ ದುಷ್ಟಜೀವಿತದ ಬಗ್ಗೆ, ತಮ್ಮ ಲೈಂಗಿಕ
ಪಾಪಗಳ ಬಗ್ಗೆ, ಮತ್ತು ನಾಚಿಕೆಕರವಾದ ಕಾರ್ಯಗಳ ಬಗ್ಗೆ
ದುಃಖಪಟ್ಟಿಲ್ಲ ಮತ್ತು ತಮ್ಮ ಹೃದಯಗಳನ್ನು ಮಾರ್ಪಾಟು
ಮಾಡಿಕೊಂಡಿಲ್ಲ.

### ಕಡೆಯ ಎಚ್ಚರಿಕೆಗಳು ಮತ್ತು ವಂದನೆಗಳು

13 ನಾನು ಮತ್ತೆ ನಿಮ್ಮ ಬಳಿಗೆ ಮೂರನೆ ಸಾರಿ ಬರುತ್ತೇನೆ.
ನೆನಪಿಟ್ಟುಕೊಳ್ಳಿರಿ, ‘‘ಪ್ರತಿಯೊಂದು ದೂರಿಗೂ
ಇಬ್ಬರಾಗಲಿ ಮೂವರಾಗಲಿ ಸಾಕ್ಷಿಗಳಿದ್ದು ತಮಗೆ ಗೊತ್ತಿರು
ವುದಾಗಿ ಮತ್ತು ಅದು ಸತ್ಯವೆಂದು’’* ಹೇಳಬೇಕು. 2ನಾನು
ನಿಮ್ಮ ಬಳಿಗೆ ಎರಡನೆ ಸಲ ಬಂದಿದ್ದಾಗ ಪಾಪಕ್ಕೆ ಒಳಗಾಗಿ
ದ್ದವರನ್ನು ಮತ್ತು ಉಳಿದವರೆಲ್ಲರನ್ನು ಎಚ್ಚರಿಸಿದೆನು. ಈಗ
ನಾನು ದೂರದಲ್ಲಿದ್ದೇನೆ. ಈ ಪಾಪಕ್ಕೆ ಒಳಗಾಗಿರುವ ಎಲ್ಲರಿಗೂ
ನಾನು ಕೊಡುವ ಎಚ್ಚರಿಕೆ ಏನಂದರೆ, ನಾನು ನಿಮ್ಮ ಬಳಿಗೆ
ಬಂದಾಗ, ನಿಮ್ಮ ಪಾಪಕ್ಕೆ ತಕ್ಕ ದಂಡನೆಯನ್ನು ವಿಧಿಸುವೆನು.
3ಕ್ರಿಸ್ತನು ನನ್ನ ಮೂಲಕ ಮಾತಾಡುತ್ತಿದ್ದಾನೆ ಎಂಬುದಕ್ಕೆ ನಿಮಗೆ
ಸಾಕ್ಷಿಬೇಕು. ನನಗಿರುವ ಸಾಕ್ಷಿ ಏನಂದರೆ, ಕ್ರಿಸ್ತನು ನಿಮ್ಮನ್ನು
ದಂಡಿಸುವುದರಲ್ಲಿ ಬಲಹೀನನಲ್ಲ. ಕ್ರಿಸ್ತನು ನಿಮ್ಮ ಮಧ್ಯದಲ್ಲಿ
ಬಲಿಷ್ಠನಾಗಿದ್ದಾನೆ. 4ಕ್ರಿಸ್ತನು ಶಿಲುಬೆಯ ಮೇಲೆ ಕೊಲ್ಲ
ಲ್ಪಟ್ಟಾಗ ಬಲಹೀನನಾಗಿದ್ದನು ಎಂಬುದೇನೊ ನಿಜ. ಆದರೆ
ಈಗ ಆತನು ದೇವರ ಶಕ್ತಿಯಿಂದ ಜೀವಿಸುತ್ತಿದ್ದಾನೆ. ಅಲ್ಲದೆ
ನಾವು ಕ್ರಿಸ್ತನಲ್ಲಿ ಬಲಹೀನರೆಂಬುದೂ ನಿಜ. ಆದರೆ ನಾವು
ನಿಮಗೋಸ್ಕರವಾಗಿ ಕ್ರಿಸ್ತನಲ್ಲಿ ದೇವರ ಶಕ್ತಿಯಿಂದ ಜೀವಿಸು
ತ್ತೇವೆ. 5ನೀವು ನಂಬಿಕೆಯಲ್ಲಿ ಜೀವಿಸುತ್ತಿದ್ದೀರೋ ಎಂಬುದನ್ನು
ತಿಳಿದುಕೊಳ್ಳಲು ನಿಮ್ಮನ್ನು ನೀವೇ ಪರೀಕ್ಷಿಸಿಕೊಳ್ಳಿರಿ. ಕ್ರಿಸ್ತ
ಯೇಸುವು ನಿಮ್ಮೊಳಗೆ ಇದ್ದಾನೆಂಬುದು ನಿಮಗೆ ಗೊತ್ತಿದೆ.
ಆತನು ನಿಮ್ಮಲ್ಲಿಲ್ಲದಿದ್ದರೆ ನೀವು ಅಯೋಗ್ಯರಾಗಿದ್ದೀರಿ.
6ಆದರೆ ನಾವು ಅಯೋಗ್ಯರಲ್ಲವೆಂದು ನಿಮಗೆ ಖಚಿತವಾಗು
ವುದರಲ್ಲಿ ನಮಗೆ ಸಂದೇಹವಿಲ್ಲ. 7ನೀವು ಯಾವ ತಪ್ಪನ್ನೂ
ಮಾಡದಿರಲಿ ಎಂಬುದಾಗಿ ನಾವು ದೇವರಲ್ಲಿ ಪ್ರಾರ್ಥಿಸುತ್ತೇವೆ.
ನಮ್ಮನ್ನು ಅಯೋಗ್ಯರೆಂದು ಜನರು ಭಾವಿಸಿಕೊಂಡರೂ ನೀವು
ಒಳ್ಳೆಯದನ್ನು ಮಾಡುವುದೇ ಮುಖ್ಯ. 8ಸತ್ಯಕ್ಕೆ ವಿರೋಧವಾದ
ಸಂಗತಿಗಳನ್ನು ಮಾಡಲು ನಮಗೆ ಸಾಧ್ಯವಿಲ್ಲ. ಸತ್ಯದ ಪರವಾದ
ಕಾರ್ಯಗಳನ್ನು ಮಾತ್ರ ಮಾಡಲು ನಮಗೆ ಸಾಧ್ಯ. 9ನೀವು
ಶಕ್ತರಾಗಿರುವುದಾದರೆ, ನಾವು ಬಲಹೀನರಾಗಿರಲು ಸಂತೋಷಿ
ಸುತ್ತೇವೆ. ನೀವು ನಂಬಿಕೆಯಲ್ಲಿ ಪರಿಪೂರ್ಣರಾಗಬೇಕೆಂಬುದೇ
ನಮ್ಮ ಉದ್ದೇಶ. 10ನಾನು ನಿಮ್ಮೊಂದಿಗೆ ಇಲ್ಲದಿರುವಾಗ ಈ
ಸಂಗತಿಗಳನ್ನು ಬರೆಯುತ್ತಿದ್ದೇನೆ. ಏಕೆಂದರೆ ನಾನು ಬಂದಾಗ
ನಿಮ್ಮನ್ನು ದಂಡಿಸುವುದಕ್ಕಾಗಿ ನನ್ನ ಅಧಿಕಾರವನ್ನು ಉಪ
ಯೋಗಿಸುವ ಅಗತ್ಯವಿರುವುದಿಲ್ಲ. ಪ್ರಭುವು ನನಗೆ ಅಧಿಕಾರ
ವನ್ನು ಕೊಟ್ಟಿರುವುದು ನಿಮ್ಮನ್ನು ಬಲಗೊಳಿಸುವುದಕ್ಕಾಗಿಯೇ
ಹೊರತು ನಾಶಮಾಡುವುದಕ್ಕಾಗಿಯಲ್ಲ. 11ಸಹೋದರ
ಸಹೋದರಿಯರೇ, ನಿಮಗೆ ವಂದನೆಗಳು. ಪರಿಪೂರ್ಣ
ರಾಗಿರಲು ಪ್ರಯತ್ನಿಸಿ. ನಾನು ಕೇಳಿಕೊಂಡ ಕಾರ್ಯಗಳನ್ನು
ಮಾಡಿರಿ. ಒಂದೇ ಮನಸ್ಸು ಉಳ್ಳವರಾಗಿದ್ದು ಸಮಾಧಾನದಿಂದ
ಜೀವಿಸಿರಿ. ಆಗ ಪ್ರೀತಿಸ್ವರೂಪನೂ ಶಾಂತಿದಾಯಕನೂ ಆದ
ದೇವರು ನಿಮ್ಮೊಂದಿಗೆ ಇರುವನು. 12ನೀವು ಒಬ್ಬರನ್ನೊಬ್ಬರು
ವಂದಿಸುವಾಗ ಪವಿತ್ರವಾದ ಮುದ್ದಿಡಿರಿ. 13ದೇವರ ಪವಿತ್ರ
ಜನರೆಲ್ಲರೂ ನಿಮಗೆ ವಂದನೆ ತಿಳಿಸಿದ್ದಾರೆ. 14ನಮ್ಮ ಪ್ರಭುವಾದ
ಯೇಸು ಕ್ರಿಸ್ತನ ಕೃಪೆಯೂ ದೇವರ ಪ್ರೀತಿಯೂ ಪವಿತ್ರಾತ್ಮನ
ಅನ್ಯೋನ್ಯತೆಯೂ ನಿಮ್ಮೆಲ್ಲರೊಂದಿಗಿರಲಿ.

---

**ಪ್ರತಿಯೊಂದು … ಸತ್ಯವೆಂದು** ಧರ್ಮೋಪದೇಶ. 19:15.

# ಗಲಾತ್ಯದವರಿಗೆ ಬರೆದ ಪತ್ರ

1 ಅಪೊಸ್ತಲನಾದ ಪೌಲನು ಬರೆಯುವ ಪತ್ರ. ನನ್ನನ್ನು
ಅಪೊಸ್ತಲನನ್ನಾಗಿ ಆರಿಸಿದವರು ಮನುಷ್ಯರಲ್ಲ. ನಾನು
ಮನುಷ್ಯರಿಂದ ಕಳುಹಿಸಲ್ಪಟ್ಟವನಲ್ಲ. ನನ್ನನ್ನು ಅಪೊಸ್ತಲ
ನನ್ನಾಗಿ ಮಾಡಿದವರು ಯಾರೆಂದರೆ, ಯೇಸುಕ್ರಿಸ್ತನು ಮತ್ತು
ತಂದೆಯಾದ ದೇವರು. ಯೇಸುವನ್ನು ಸತ್ತವರೊಳಗಿಂದ ಎಬ್ಬಿಸಿ
ದಾತನು ದೇವರೇ.
2ನಾನು ಮತ್ತು ನನ್ನೊಂದಿಗಿರುವ ಎಲ್ಲಾ ಸಹೋದರರು ಈ
ಪತ್ರವನ್ನು ಗಲಾತ್ಯದಲ್ಲಿರುವ ಸಭೆಗಳವರಿಗೆ ಬರೆದಿದ್ದೇವೆ.
3ನಮ್ಮ ತಂದೆಯಾದ ದೇವರೂ ಪ್ರಭುವಾದ ಯೇಸು
ಕ್ರಿಸ್ತನೂ ನಿಮಗೆ ಕೃಪೆ ತೋರಲಿ ಮತ್ತು ಶಾಂತಿ ಕೊಡಲಿ ಎಂದು
ನಾವು ಪ್ರಾರ್ಥಿಸುತ್ತೇವೆ. 4ನಾವು ವಾಸಿಸುತ್ತಿರುವ ಈ ಕೆಟ್ಟ
ಲೋಕದೊಳಗಿಂದ ನಮ್ಮನ್ನು ಬಿಡುಗಡೆ ಮಾಡಬೇಕೆಂದು
ಯೇಸು ನಮ್ಮ ಪಾಪಗಳಿಗಾಗಿ ತನ್ನನ್ನೇ ಕೊಟ್ಟುಬಿಟ್ಟನು. ಇದು
ತಂದೆಯಾದ ದೇವರ ಚಿತ್ತವಾಗಿತ್ತು. 5ಎಂದೆಂದಿಗೂ ದೇವರಿಗೆ
ಮಹಿಮೆಯಾಗಲಿ. ಆಮೆನ್.

### ಸತ್ಯಸುವಾರ್ತೆ ಒಂದೇ ಒಂದು

6ಸ್ವಲ್ಪಕಾಲದ ಹಿಂದೆ ತನ್ನನ್ನು ಹಿಂಬಾಲಿಸುವುದಕ್ಕಾಗಿ
ನಿಮ್ಮನ್ನು ಕರೆದಾತನು ದೇವರೇ. ಆತನು ನಿಮ್ಮನ್ನು ಯೇಸು
ಕ್ರಿಸ್ತನ ಮೂಲಕವಾಗಿ ಬಂದ ತನ್ನ ಕೃಪೆಯ ಮೂಲಕ ಕರೆದನು.
ಆದರೆ ಈಗ ನಾನು ನಿಮ್ಮೆಲ್ಲರ ವಿಷಯದಲ್ಲಿ ಆಶ್ಚರ್ಯ
ಗೊಂಡಿದ್ದೇನೆ. ನೀವು ಈಗಾಗಲೇ ವಿಮುಖರಾಗಿ ಬೇರೊಂದು
ಸುವಾರ್ತೆಯನ್ನು ನಂಬಿಕೊಂಡಿದ್ದೀರಿ. 7ನಿಜವಾಗಿ ಹೇಳಬೇಕಾ
ದರೆ, ಬೇರೊಂದು ಸತ್ಯ ಸುವಾರ್ತೆಯು ಇಲ್ಲವೇ ಇಲ್ಲ. ಆದರೆ
ಕೆಲವು ಜನರು ನಿಮ್ಮನ್ನು ಗಲಿಬಿಲಿಗೊಳಿಸುತ್ತಿದ್ದಾರೆ. ಅವರು
ಕ್ರಿಸ್ತನ ಸುವಾರ್ತೆಯನ್ನು ಬದಲಾಯಿಸಬೇಕೆಂದಿದ್ದಾರೆ. 8ನಾವು
ನಿಮಗೆ ಸತ್ಯಸುವಾರ್ತೆಯನ್ನು ತಿಳಿಸಿದೆವು. ಆದ್ದರಿಂದ ನಾವೇ
ಆಗಲಿ, ಪರಲೋಕದ ದೇವದೂತರೇ ಆಗಲಿ ಮತ್ತೊಂದು
ಸುವಾರ್ತೆಯನ್ನು ತಿಳಿಸಿದರೆ ಶಾಪಗ್ರಸ್ತರಾಗಲಿ. 9ನಾನು ನಿಮಗೆ
ಇದನ್ನು ಮೊದಲೇ ತಿಳಿಸಿದ್ದರೂ ಈಗ ಮತ್ತೆ ಹೇಳುತ್ತೇನೆ. ನೀವು
ಈಗಾಗಲೇ ಸ್ವೀಕರಿಸಿಕೊಂಡಿರುವ ಸತ್ಯಸುವಾರ್ತೆಗೆ ವಿರುದ್ಧ
ವಾದದ್ದನ್ನು ಯಾವನಾದರೂ ಸಾರಿದರೆ ಅವನು ಶಾಪಗ್ರಸ್ತ
ನಾಗಲಿ. 10ಮನುಷ್ಯರು ನನ್ನನ್ನು ಸ್ವೀಕರಿಸಿಕೊಳ್ಳುವಂತೆ ಮಾಡು
ವುದಕ್ಕಾಗಿ ನಾನು ಪ್ರಯತ್ನಿಸುತ್ತಿದ್ದೇನೆಂದು ನೀವು ಭಾವಿಸು
ತ್ತೀರೋ? ಇಲ್ಲ! ನಾನು ದೇವರನ್ನೇ ಮೆಚ್ಚಿಸಲು ಪ್ರಯತ್ನಿ
ಸುತ್ತಿದ್ದೇನೆ. ಮನುಷ್ಯರನ್ನು ಮೆಚ್ಚಿಸುವುದಕ್ಕಾಗಿ ನಾನು ಪ್ರಯತ್ನಿ
ಸುತ್ತಿದ್ದೇನೋ? ನಾನು ಮನುಷ್ಯರನ್ನು ಮೆಚ್ಚಿಸ ಬೇಕೆಂದಿದ್ದರೆ
ಯೇಸು ಕ್ರಿಸ್ತನ ಸೇವಕನಾಗುತ್ತಿರಲಿಲ್ಲ.

### ಪೌಲನ ಅಧಿಕಾರ ದೇವರಿಂದ ಬಂದದ್ದು

11 ಸಹೋದರರೇ, ನಾವು ಸಾರಿದ ಸುವಾರ್ತೆ ಮನುಷ್ಯರಿಂದ
ಬಂದದ್ದಲ್ಲವೆಂಬುದು ನಿಮಗೆ ತಿಳಿದಿರಲಿ. 12ನನಗೆ ಸುವಾರ್ತೆ
ದೊರೆತದ್ದು ಮನುಷ್ಯರಿಂದಲ್ಲ. ಯಾವನೂ ನನಗೆ ಸುವಾರ್ತೆ
ಯನ್ನು ಉಪದೇಶಿಸಲಿಲ್ಲ. ನಾನು ಜನರಿಗೆ ಉಪದೇಶಿಸ
ಬೇಕಾದ ಸುವಾರ್ತೆಯನ್ನು ಯೇಸು ಕ್ರಿಸ್ತನೇ ನನಗೆ
ಪ್ರಕಟಿಸಿದನು.
13ನನ್ನ ಹಿಂದಿನ ಜೀವಿತದ ಬಗ್ಗೆ ನೀವು ಕೇಳಿದ್ದೀರಿ. ನಾನು
ಯೆಹೂದ್ಯಧರ್ಮಕ್ಕೆ ಸೇರಿದವನಾಗಿದ್ದೆನು. ದೇವರ ಸಭೆಯನ್ನು
ಬಹಳವಾಗಿ ಹಿಂಸಿಸಿದೆನು. ಕ್ರೈಸ್ತ ಸಭೆಯನ್ನು ನಾಶಮಾಡಲು
ಪ್ರಯತ್ನಿಸುತ್ತಿದ್ದೆನು. 14ಯೆಹೂದ್ಯಧರ್ಮದ ನಾಯಕನಾಗಲು
ನನ್ನ ಸಮವಯಸ್ಕರರಿಗಿಂತ ಎಷ್ಟೋ ಕಾರ್ಯಗಳನ್ನು ಮಾಡಿ
ದೆನು. ನಮ್ಮ ಪೂರ್ವಿಕರ ಸಂಪ್ರದಾಯಗಳನ್ನು ಬೇರೆಲ್ಲರಿ
ಗಿಂತಲೂ ಅತ್ಯಧಿಕ ನಿಷ್ಠೆಯಿಂದ ಅನುಸರಿಸಿದೆನು. 15ಆದರೆ
ನಾನು ಹುಟ್ಟುವುದಕ್ಕಿಂತ ಮೊದಲೇ ನನ್ನ ವಿಷಯದಲ್ಲಿ
ದೇವರಿಗೆ ವಿಶೇಷವಾದ ಯೋಜನೆಯಿತ್ತು. ಆದ್ದರಿಂದ ದೇವರು
ತನ್ನ ಕೃಪೆಯಿಂದ ನನ್ನನ್ನು ಕರೆದನು. 16ಆತನ ಮಗನ
ವಿಷಯವಾದ ಸುವಾರ್ತೆಯನ್ನು ನಾನು ಯೆಹೂದ್ಯರಲ್ಲದವರಿಗೆ
ತಿಳಿಸಬೇಕೆಂಬುದು ದೇವರ ಚಿತ್ತವಾಗಿತ್ತು. ಆದ್ದರಿಂದ ದೇವರು
ತನ್ನ ಮಗನನ್ನು ನನಗೆ ತೋರಿಸಿದನು. ಆತನು ನನ್ನನ್ನು ಕರೆದಾಗ
ನಾನು ಯಾರಿಂದಲೂ ಸಲಹೆಯನ್ನಾಗಲಿ ಸಹಾಯವನ್ನಾಗಲಿ
ತೆಗೆದುಕೊಳ್ಳಲಿಲ್ಲ. 17ಅಪೊಸ್ತಲರನ್ನು ನೋಡುವುದಕ್ಕಾಗಿ
ಜೆರುಸಲೇಮಿಗೂ ಹೋಗಲಿಲ್ಲ. ಅವರು ನನಗಿಂತ ಮೊದಲೇ
ಅಪೊಸ್ತಲರಾಗಿದ್ದರು. ಆದರೆ, ನಾನು ತಡಮಾಡದೆ ಅರೇಬಿ
ಯಾಕ್ಕೆ ಹೋದೆನು. ಆ ಬಳಿಕ ದಮಸ್ಕ ಪಟ್ಟಣಕ್ಕೆ ಹಿಂತಿರು
ಗಿದೆನು. 18ಮೂರು ವರ್ಷಗಳ ನಂತರ ಪೇತ್ರನನ್ನು ಭೇಟಿ
ಯಾಗಲು ಜೆರುಸಲೇಮಿಗೆ ಹೋದೆನು. ಅವನೊಂದಿಗೆ
ಹದಿನೈದು ದಿನಗಳ ಕಾಲ ಇದ್ದೆನು. 19ಪ್ರಭುವಿನ (ಯೇಸು)
ಸಹೋದರನಾದ ಯಾಕೋಬನನ್ನು ಹೊರತು ಬೇರೆ ಯಾವ
ಅಪೊಸ್ತಲರನ್ನು ನಾನು ಭೇಟಿಯಾಗಲಿಲ್ಲ. 20ನಾನು ಬರೆಯು
ತ್ತಿರುವ ಈ ಸಂಗತಿಗಳು ಸುಳ್ಳಲ್ಲವೆಂದು ದೇವರಿಗೆ ಗೊತ್ತಿದೆ.
21ತರುವಾಯ ಸಿರಿಯ ಮತ್ತು ಕಿಲಿಕ್ಯ ಪ್ರಾಂತ್ಯಗಳಿಗೆ ಹೋದೆನು.
22ಕ್ರಿಸ್ತನಲ್ಲಿರುವ ಜುದೇಯದ ಸಭೆಗಳವರು ನನ್ನನ್ನು
ಹಿಂದೆಂದೂ ಭೇಟಿಯಾಗಿರಲಿಲ್ಲ. 23“ಈ ಮನುಷ್ಯನು
ನಮ್ಮನ್ನು ಹಿಂಸಿಸುತ್ತಿದ್ದನು. ಆದರೆ ಈಗ ಇವನು ತಾನು ಮೊದ
ಲೊಮ್ಮೆ ನಾಶಮಾಡಲು ಪ್ರಯತ್ನಿಸಿದ ನಂಬಿಕೆಯ ಬಗ್ಗೆ ಜನರಿಗೆ
ಹೇಳುತ್ತಿದ್ದಾನೆ” ಎಂಬುದನ್ನು ಮಾತ್ರ ಅವರು ಕೇಳಿದ್ದರು.
24ಅವರು ನನ್ನ ನಿಮಿತ್ತ ದೇವರನ್ನು ಕೊಂಡಾಡಿದರು.

### ಇತರ ಅಪೊಸ್ತಲರು ಪೌಲನನ್ನು ಸ್ವೀಕರಿಸಿಕೊಂಡರು

2 ಹದಿನಾಲ್ಕು ವರ್ಷಗಳ ನಂತರ ಬಾರ್ನಬನ ಜೊತೆಯಲ್ಲಿ
ತೀತನನ್ನು ಕರೆದುಕೊಂಡು ಮತ್ತೆ ಜೆರುಸಲೇಮಿಗೆ
ಹೋದೆನು. 2ನಾನು ಹೋಗಲೇಬೇಕೆಂದು ದೇವರು ನನಗೆ
ತಿಳಿಸಿದ್ದರಿಂದ ವಿಶ್ವಾಸಿಗಳ ನಾಯಕರಾದ ಈ ಜನರ ಬಳಿಗೆ
ಹೋದೆನು. ನಾವಷ್ಟೇ ಇದ್ದಾಗ, ಯೆಹೂದ್ಯರಲ್ಲದವರಿಗೆ
ಸಾರುವ ಸುವಾರ್ತೆಯನ್ನು ಇವರಿಗೆ ತಿಳಿಸಿದೆನು. ನಾನು
ಮೊದಲು ಮಾಡಿದ ಸೇವೆ ಮತ್ತು ಈಗ ಮಾಡುತ್ತಿರುವ ಸೇವೆ
ವ್ಯರ್ಥವಾಗಬಾರದೆಂಬ ಉದ್ದೇಶದಿಂದ ಇವರಿಗೆ ಅರ್ಥವಾಗು
ವಂತೆ ನನ್ನ ಸೇವೆಯನ್ನು ತಿಳಿಸಿದೆನು. 3-4ತೀತನು ನನ್ನೊಂದಿ
ಗಿದ್ದನು. ಅವನು ಗ್ರೀಕನಾಗಿದ್ದನು. ಆದರೆ ಅವನು ಸುನ್ನತಿ
ಮಾಡಿಸಿಕೊಳ್ಳಬೇಕೆಂದು ಯಾರೂ ಬಲವಂತ ಮಾಡಲಿಲ್ಲ. ಈ
ಸಮಸ್ಯೆಗಳ ಬಗ್ಗೆ ನಾವು ಮಾತಾಡಲೇಬೇಕಿತ್ತು. ಏಕೆಂದರೆ ಕೆಲವು
ಸುಳ್ಳುಸಹೋದರರು ಬಂದು ನಮ್ಮ ಸಭೆಯೊಳಗೆ ಸೇರಿಕೊಂಡಿ
ದ್ದರು. ಯೇಸು ಕ್ರಿಸ್ತನಲ್ಲಿ ನಮಗಿರುವ ಸ್ವತಂತ್ರ್ಯದ ಬಗ್ಗೆ
ರಹಸ್ಯವಾಗಿ ತಿಳಿದುಕೊಳ್ಳಲು ಅವರು ಬಂದಿದ್ದರು. 5ಆದರೆ ಆ
ಸುಳ್ಳು ಸಹೋದರರು ಬಯಸಿದ ಯಾವುದಕ್ಕೂ ನಾವು ಒಂದು
ಕ್ಷಣವಾದರೂ ಒಪ್ಪಿಗೆ ಕೊಡಲಿಲ್ಲ. ಸುವಾರ್ತೆಯ ಸತ್ಯವು
ನಿಮ್ಮಲ್ಲಿ ಸ್ಥಿರವಾಗಿರಬೇಕೆಂಬುದೇ ನಮ್ಮ ಅಪೇಕ್ಷೆಯಾಗಿತ್ತು.
6ನಾನು ಬೋಧಿಸುವ ಸುವಾರ್ತೆಗೆ ಅವರೇನೂ ಸೇರಿಸಲಿಲ್ಲ.
(ಅವರು ಪ್ರಮುಖರಾಗಿದ್ದರೊ ಪ್ರಮುಖರಾಗಿರಲಿಲ್ಲವೊ
ಅದು ನನಗೆ ಮುಖ್ಯವಲ್ಲ. ದೇವರಿಗೆ ಎಲ್ಲಾ ಜನರು ಒಂದೇ
ಆಗಿದ್ದಾರೆ.) 7ಆದರೆ ಪೇತ್ರನಂತೆ ನನಗೂ ದೇವರು ವಿಶೇಷ
ವಾದ ಕೆಲಸವನ್ನು ಕೊಟ್ಟಿದ್ದಾನೆಂಬುದನ್ನು ಈ ನಾಯಕರು
ತಿಳಿದುಕೊಂಡರು. ಯೆಹೂದ್ಯರಿಗೆ ಸುವಾರ್ತೆಯನ್ನು ತಿಳಿಸ
ಬೇಕೆಂಬ ಕೆಲಸವನ್ನು ದೇವರು ಪೇತ್ರನಿಗೆ ಕೊಟ್ಟನು. ಆದರೆ
ಯೆಹೂದ್ಯರಲ್ಲದವರಿಗೆ ಸುವಾರ್ತೆಯನ್ನು ತಿಳಿಸಬೇಕೆಂಬ
ಕೆಲಸವನ್ನು ದೇವರು ನನಗೆ ಕೊಟ್ಟನು. 8ಯೆಹೂದ್ಯರಿಗೆ
ಅಪೊಸ್ತಲನಾಗಿ ಕೆಲಸ ಮಾಡಲು ದೇವರು ಪೇತ್ರನಿಗೆ ವಹಿಸಿ
ಕೊಟ್ಟಂತೆಯೇ ಯೆಹೂದ್ಯರಲ್ಲದವರಿಗೆ ಅಪೊಸ್ತಲನಾಗಿ ಕೆಲಸ
ಮಾಡಲು ನನಗೂ ವಹಿಸಿಕೊಟ್ಟನು. 9ದೇವರು ನನಗೆ ಈ
ವಿಶೇಷವಾದ ವರವನ್ನು ಕೊಟ್ಟಿದ್ದಾನೆಂಬುದನ್ನು ನಾಯಕ
ರೆನಿಸಿಕೊಂಡಿದ್ದ ಯಾಕೋಬ, ಪೇತ್ರ, ಯೋಹಾನರು ಕಂಡು
ಕೊಂಡರು. ಆದ್ದರಿಂದ ಅವರು ಬಾರ್ನಬನನ್ನು ಮತ್ತು ನನ್ನನ್ನು
ಸ್ವೀಕರಿಸಿಕೊಂಡರು. ಅವರು ನಮಗೆ, ‘‘ಪೌಲ ಮತ್ತು
ಬಾರ್ನಬರೇ, ನೀವು ಯೆಹೂದ್ಯರಲ್ಲದವರ ಬಳಿಗೆ ಹೋಗಿರಿ.
ನಾವು ಯೆಹೂದ್ಯರ ಬಳಿಗೆ ಹೋಗುತ್ತೇವೆ’’ ಎಂದು ತಿಳಿಸಿದರು.
10ಬಡಜನರನ್ನು ಜ್ಞಾಪಕದಲ್ಲಿಟ್ಟುಕೊಂಡು ಅವರಿಗೆ ಸಹಾಯ
ಮಾಡಬೇಕೆಂಬ ಒಂದೇ ಒಂದು ಸಂಗತಿಯನ್ನು ಅವರು ನಮಗೆ
ತಿಳಿಸಿದರು. ನಾನೂ ಈ ಕಾರ್ಯವನ್ನು ಮಾಡಬೇಕು ಎಂದು
ಕೊಂಡಿದ್ದೆನು.

### ಪೇತ್ರನ ತಪ್ಪನ್ನು ಪೌಲನು ತೋರಿಸಿದನು

11 ಪೇತ್ರನು ಅಂತಿಯೋಕ್ಯಕ್ಕೆ ಬಂದಾಗ, ಅವನು
ತಪ್ಪಿತಸ್ಥನೆಂದು ಸ್ಪಷ್ಟವಾಗಿ ತೋರಿದ್ದರಿಂದ ನಾನು ಅವನನ್ನು
ಮುಖಾಮುಖಿಯಾಗಿ ಖಂಡಿಸಿದೆನು. 12ನಡೆದ ಸಂಗತಿ
ಏನಂದರೆ: ಪೇತ್ರನು ಮೊದಲು ಅಂತಿಯೋಕ್ಯಕ್ಕೆ ಬಂದಾಗ
ಅವನು ಯೆಹೂದ್ಯರಲ್ಲದವರೊಂದಿಗೆ ಊಟಮಾಡಿದನು
ಮತ್ತು ಅನ್ಯೋನ್ಯತೆಯಿಂದಿದ್ದನು. ಆ ಬಳಿಕ ಯಾಕೋಬನಿಂದ
ಕಳುಹಿಸಲ್ಪಟ್ಟಿದ್ದ ಕೆಲವು ಯೆಹೂದ್ಯರು ಬಂದರು. ಆಗ,
ಪೇತ್ರನು ಯೆಹೂದ್ಯರಲ್ಲದವರೊಂದಿಗೆ ಊಟಮಾಡುವು
ದನ್ನು ನಿಲ್ಲಿಸಿದನು. ಪೇತ್ರನು ತನ್ನನ್ನು ಯೆಹೂದ್ಯರಲ್ಲದವರಿಂದ
ಬೇರ್ಪಡಿಸಿಕೊಂಡನು. ಯೆಹೂದ್ಯರಲ್ಲದವರೆಲ್ಲರೂ ಸುನ್ನತಿ
ಮಾಡಿಸಿಕೊಳ್ಳಬೇಕೆಂದು ನಂಬಿಕೊಂಡಿದ್ದ ಯೆಹೂದ್ಯರಿಗೆ
ಅವನು ಹೆದರಿಕೊಂಡನು. 13ಹೀಗೆ ಪೇತ್ರನು ಕಪಟತನದಿಂದ
ವರ್ತಿಸಿದನು. ಯೆಹೂದ್ಯರಾದ ವಿಶ್ವಾಸಿಗಳು ಸಹ ಪೇತ್ರನನ್ನೇ
ಅನುಸರಿಸಿದರು. ಕಪಟತನದಿಂದ ವರ್ತಿಸಿದರು. ಇವರ ವರ್ತನೆ
ಯಿಂದ ಬಾರ್ನಬನು ಸಹ ಪ್ರಭಾವಿತನಾದನು. 14ಈ
ಯೆಹೂದ್ಯರ ವರ್ತನೆಯನ್ನು ನಾನು ಗಮನಿಸಿದೆನು. ಅವರು
ಸುವಾರ್ತೆಯ ಸತ್ಯವನ್ನು ಅನುಸರಿಸದೆ ಇರುವುದನ್ನು ಕಂಡು
ಅಲ್ಲಿದ್ದ ಯೆಹೂದ್ಯರೆಲ್ಲರಿಗೂ ಕೇಳಿಸುವಂತೆ ನಾನು
ಪೇತ್ರನಿಗೆ,‘‘ನೀನು ಯೆಹೂದ್ಯನಾಗಿರುವೆ. ಆದರೆ ನೀನು
ಯೆಹೂದ್ಯನಂತೆ ಜೀವಿಸುತ್ತಿಲ್ಲ. ನೀನು ಯೆಹೂದ್ಯನಲ್ಲದವ
ನಂತೆ ಜೀವಿಸುತ್ತಿರುವೆ. ಹೀಗಿರಲು ನೀನು ಯೆಹೂದ್ಯರಲ್ಲ
ದವರಿಗೆ ಯೆಹೂದ್ಯರಂತೆ ಜೀವಿಸಬೇಕೆಂದು ಒತ್ತಾಯಮಾಡು
ವುದೇಕೆ?’’ ಎಂದು ಕೇಳಿದೆನು. 15ನಾವಂತೂ ಹುಟ್ಟು
ಯೆಹೂದ್ಯರು. ನಾವು ಪಾಪಿಗಳೆನಿಸಿಕೊಂಡಿರುವ ಅನ್ಯ
ಜನರಲ್ಲ. 16ಕೇವಲ ಧರ್ಮಶಾಸ್ತ್ರವನ್ನು ಅನುಸರಿಸುವುದರ
ಮೂಲಕ ಒಬ್ಬನು ನೀತಿವಂತನಾಗಲು ಸಾಧ್ಯವಿಲ್ಲವೆಂಬುದು
ನಮಗೆ ಗೊತ್ತಿದೆ. ಯೇಸು ಕ್ರಿಸ್ತನಲ್ಲಿ ನಂಬಿಕೆಯಿಡುವುದ
ರಿಂದಲೇ ಒಬ್ಬನು ನೀತಿವಂತನಾಗಲು ಸಾಧ್ಯ. ಆದುದರಿಂದ
ನೀತಿವಂತರಾಗಲು ನಾವು ಯೇಸು ಕ್ರಿಸ್ತನಲ್ಲಿ ನಂಬಿಕೆ ಇಟ್ಟೆವು.
ಹೀಗಿರಲಾಗಿ, ನಾವು ನೀತಿವಂತರಾದದ್ದು ಕ್ರಿಸ್ತನಲ್ಲಿ ನಂಬಿಕೆ
ಯಿಟ್ಟಿದ್ದರಿಂದಲೇ ಹೊರತು ಧರ್ಮಶಾಸ್ತ್ರವನ್ನು ಅನುಸರಿಸಿದ್ದ
ರಿಂದಲ್ಲ. ಇದು ಸತ್ಯ. ಏಕೆಂದರೆ, ಧರ್ಮಶಾಸ್ತ್ರವನ್ನು ಅನುಸರಿಸು
ವುದರಿಂದ ಯಾರೂ ನೀತಿವಂತರಾಗಲು ಸಾಧ್ಯವಿಲ್ಲ.
17ಯೆಹೂದ್ಯರಾದ ನಾವು ನೀತಿವಂತರಾಗಲು ಕ್ರಿಸ್ತನ ಬಳಿಗೆ
ಬಂದೆವು. ಆದ್ದರಿಂದ ನಾವು ಸಹ ಪಾಪಿಗಳಾಗಿದ್ದೇವೆಂಬುದು
ಸ್ಪಷ್ಟವಾಗಿದೆ. ಕ್ರಿಸ್ತನು ನಮ್ಮನ್ನು ಪಾಪಿಗಳನ್ನಾಗಿ ಮಾಡುತ್ತಾ
ನೆಂಬುದು ಇದರ ಅರ್ಥವೇ? ಇಲ್ಲ. 18ಆದರೆ ನಾನು
ತೊರೆದುಬಿಟ್ಟ ಆ ಸಂಗತಿಗಳನ್ನು ಮತ್ತೆ ಬೋಧಿಸ
ಲಾರಂಭಿಸಿದರೆ ನಿಜವಾಗಿಯೂ ತಪ್ಪು ಮಾಡಿದವನಾಗುತ್ತೇನೆ.

19ನಾನು ಧರ್ಮಶಾಸ್ತ್ರಕ್ಕಾಗಿ ಜೀವಿಸುವುದನ್ನು ತೊರೆದು
ಬಿಟ್ಟೆನು. ನನ್ನನ್ನು ಧರ್ಮಶಾಸ್ತ್ರವೇ ಕೊಂದಿತು. ಈಗ ನಾನು
ದೇವರಿಗಾಗಿ ಜೀವಿಸಬೇಕೆಂದು ಧರ್ಮಶಾಸ್ತ್ರದ ಪಾಲಿಗೆ ಸತ್ತು
ಹೋದೆನು. ನಾನು ಕ್ರಿಸ್ತನೊಂದಿಗೆ ಶಿಲುಬೆಗೇರಿಸಲ್ಪಟ್ಟೆನು.

20ಆದ್ದರಿಂದ ಈಗ ನನ್ನೊಳಗೆ ಜೀವಿಸುತ್ತಿರುವವನು
ನಿಜವಾಗಿಯೂ ನಾನಲ್ಲ, ಕ್ರಿಸ್ತನೇ ನನ್ನೊಳಗೆ ಜೀವಿಸುತ್ತಿದ್ದಾನೆ.
ನಾನಿನ್ನೂ ದೇಹಾರೂಢನಾಗಿದ್ದೇನೆ. ಆದರೆ ನಾನು ಜೀವಿಸು
ತ್ತಿರುವುದು ದೇವರ ಮಗನ ಮೇಲೆ ನನಗಿರುವ ನಂಬಿಕೆ
ಯಿಂದಲೇ. ನನ್ನನ್ನು ಪ್ರೀತಿಸಿದಾತನು ಯೇಸುವೇ. ನನ್ನನ್ನು
ರಕ್ಷಿಸುವುದಕ್ಕಾಗಿ ಆತನು ತನ್ನನ್ನೇ ಕೊಟ್ಟುಬಿಟ್ಟನು. 21ಇದು
ದೇವರ ವರವಾಗಿದೆ ಮತ್ತು ನನಗೆ ಅತಿಮುಖ್ಯವಾದದ್ದಾಗಿದೆ.
ಏಕೆಂದರೆ ಧರ್ಮಶಾಸ್ತ್ರವು ನಮ್ಮನ್ನು ನೀತಿವಂತರನ್ನಾಗಿ ಮಾಡ
ಬಹುದಾಗಿದ್ದರೆ, ಕ್ರಿಸ್ತನು ಸಾಯುವ ಅಗತ್ಯವೇ ಇರಲಿಲ್ಲ.

## ನಂಬಿಕೆಯ ಮೂಲಕ ದೇವರಾಶೀರ್ವಾದ

3 ಯೇಸು ಕ್ರಿಸ್ತನು ಶಿಲುಬೆಯ ಮೇಲೆ ಮರಣ ಹೊಂದಿದ್ದರ
ಬಗ್ಗೆ ಗಲಾತ್ಯದಲ್ಲಿರುವ ನಿಮಗೆ ಬಹು ಸ್ಪಷ್ಟವಾಗಿ ತಿಳಿಸ
ಲಾಯಿತು. ಆದರೆ ನೀವು ಬಹು ಬುದ್ಧಿಹೀನರಾಗಿದ್ದೀರಿ.
ನಿಮ್ಮನ್ನು ಮೋಸಗೊಳಿಸಲು ಬೇರೊಬ್ಬನಿಗೆ ಅವಕಾಶ ಮಾಡಿ
ಕೊಟ್ಟಿರಿ. 2ಈ ವಿಷಯವೊಂದನ್ನು ನನಗೆ ತಿಳಿಸಿರಿ : ನೀವು
ಪವಿತ್ರಾತ್ಮನನ್ನು ಹೊಂದಿಕೊಂಡದ್ದು ಹೇಗೆ? ಧರ್ಮಶಾಸ್ತ್ರ
ವನ್ನು ಅನುಸರಿಸಿದ್ದರಿಂದ ಹೊಂದಿಕೊಂಡಿರೊ? ಇಲ್ಲ!
ಸುವಾರ್ತೆಯನ್ನು ಕೇಳಿ ಅದರಲ್ಲಿ ನಂಬಿಕೆಯಿಟ್ಟದ್ದರಿಂದಲೇ
ಪವಿತ್ರಾತ್ಮನನ್ನು ಹೊಂದಿಕೊಂಡಿರಿ. 3ಕ್ರಿಸ್ತನಲ್ಲಿಯ ನಿಮ್ಮ
ಜೀವಿತವನ್ನು ಪವಿತ್ರಾತ್ಮನೊಂದಿಗೆ ಆರಂಭಿಸಿದಿರಿ. ಈಗ ಅದನ್ನು
ನಿಮ್ಮ ಸ್ವಂತ ಶಕ್ತಿಯೊಂದಿಗೆ ಮುಂದುವರಿಸಲು ಪ್ರಯತ್ನಿ
ಸುತ್ತೀರೊ? ಅದು ಬುದ್ಧಿಹೀನತೆ! 4ಅನೇಕ ಸಂಗತಿಗಳನ್ನು
ಅನುಭವದಿಂದ ತಿಳಿದುಕೊಂಡಿದ್ದೀರಿ. ಆ ಅನುಭವಗಳೆಲ್ಲಾ
ವ್ಯರ್ಥಗೊಂಡವೇ? 5ದೇವರು ಪವಿತ್ರಾತ್ಮನನ್ನು ಕೊಡುವುದು
ನೀವು ಧರ್ಮಶಾಸ್ತ್ರವನ್ನು ಅನುಸರಿಸಿದ್ದರಿಂದಲೋ? ದೇವರು
ಮಹತ್ಕಾರ್ಯಗಳನ್ನು ಮಾಡುವುದು ನೀವು ಧರ್ಮಶಾಸ್ತ್ರವನ್ನು
ಅನುಸರಿಸಿದ್ದರಿಂದಲೋ? ಇಲ್ಲ! ಸುವಾರ್ತೆಯನ್ನು ಕೇಳಿ
ಅದನ್ನು ನಂಬಿಕೊಂಡದ್ದರಿಂದ ದೇವರು ನಿಮಗೆ ಪವಿತ್ರಾತ್ಮ
ನನ್ನು ಕೊಡುತ್ತಾನೆ ಮತ್ತು ಮಹತ್ಕಾರ್ಯಗಳನ್ನು ಮಾಡುತ್ತಾನೆ.
6ಪವಿತ್ರ ಗ್ರಂಥವು ಅಬ್ರಹಾಮನ ವಿಷಯವಾಗಿಯೂ
ಇದನ್ನೇ ಹೇಳುತ್ತದೆ. ‘‘ಅಬ್ರಹಾಮನು ದೇವರನ್ನು ನಂಬಿದನು.
ದೇವರು ಅವನ ನಂಬಿಕೆಯನ್ನು ಪರಿಗಣಿಸಿದ್ದರಿಂದ ನೀತಿವಂತ
ನೆಂಬ ನಿರ್ಣಯ ಅವನಿಗೆ ದೊರೆಯಿತು.’’* 7ಆದ್ದರಿಂದ
ನಂಬಿಕೆಯನ್ನು ಹೊಂದಿರುವ ಜನರೇ ಅಬ್ರಹಾಮನ ‘‘ನಿಜ
ಮಕ್ಕಳು’’ ಎಂಬುದು ನಿಮಗೆ ತಿಳಿದಿರಬೇಕು. 8ದೇವರು
ಯೆಹೂದ್ಯರಲ್ಲದವರನ್ನು ಅವರ ನಂಬಿಕೆಯ ಮೂಲಕ ನೀತಿ
ವಂತರನ್ನಾಗಿ ಮಾಡುತ್ತಾನೆ. ‘‘ಅಬ್ರಹಾಮನೇ, ನಿನ್ನ ಮೂಲಕ
ದೇವರು ಭೂಮಿಯ ಮೇಲಿರುವ ಜನರನ್ನೆಲ್ಲ ಆಶೀರ್ವದಿಸು
ತ್ತಾನೆ’’* ಎಂಬ ಸುವಾರ್ತೆಯನ್ನು ಅವನಿಗೆ ಮೊದಲೇ ತಿಳಿಸ
ಲಾಯಿತೆಂದು ಪವಿತ್ರ ಗ್ರಂಥವು ಹೇಳುತ್ತದೆ. 9ಅವನು ಇದನ್ನು
ನಂಬಿದ್ದರಿಂದಲೇ ಆಶೀರ್ವಾದ ಹೊಂದಿದನು. ಇದೇ ನಿಯಮ
ಇಂದಿಗೂ ಅನ್ವಯಿಸುತ್ತದೆ. ಅವನು ಆಶೀರ್ವಾದ ಹೊಂದಿ
ದಂತೆಯೇ ನಂಬಿಕೆಯಿಡುವ ಜನರೆಲ್ಲರೂ ಆಶೀರ್ವಾದ
ಹೊಂದುವರು. 10ಆದರೆ ನೀತಿವಂತರಾಗಲು ಧರ್ಮಶಾಸ್ತ್ರ
ವನ್ನು ಅವಲಂಬಿಸಿಕೊಂಡಿರುವವರು ಶಾಪಗ್ರಸ್ತರಾಗಿದ್ದಾರೆ.
ಏಕೆಂದರೆ ಪವಿತ್ರ ಗ್ರಂಥವು ಹೇಳುವಂತೆ, ‘‘ಧರ್ಮಶಾಸ್ತ್ರದಲ್ಲಿ
ಬರೆದಿರುವ ನಿಯಮಗಳನ್ನೆಲ್ಲಾ ಕೈಕೊಂಡು ನಡೆಯಬೇಕು.
ಅವುಗಳಿಗೆ ಎಂದಾದರೂ ಅವಿಧೇನಾದವನಾದನು ಶಾಪಗ್ರಸ್ತ
ನಾಗಿದ್ದಾನೆ.’’*
11ಆದ್ದರಿಂದ ಧರ್ಮಶಾಸ್ತ್ರದ ಮೂಲಕ ಯಾವನೂ
ನೀತಿವಂತನಾಗಲು ಸಾಧ್ಯವಿಲ್ಲ ಎಂಬುದು ಸ್ಪಷ್ಟವಾಗಿದೆ. ಪವಿತ್ರ
ಗ್ರಂಥವು ಹೇಳುವಂತೆ, ‘‘ನಂಬಿಕೆಯ ಮೂಲಕ
ನೀತಿವಂತನಾದವನು ಸದಾಕಾಲ ಜೀವಿಸುವನು.’’*

**ಅಬ್ರಹಾಮನು … ದೊರೆಯಿತು** ಆದಿಕಾಂಡ 15:6.

**ಅಬ್ರಹಾಮನೇ … ಆಶೀರ್ವದಿಸುತ್ತಾನೆ** ಆದಿಕಾಂಡ 12:3.

12ಧರ್ಮಶಾಸ್ತ್ರವು ನಂಬಿಕೆಯ ಮಾರ್ಗವನ್ನು ಬಳಸದೆ, ‘‘ಈ
ವಿಧಿನಿಯಮಗಳನ್ನು ಪಾಲಿಸುವವನು ಅವುಗಳ ಮೂಲಕ
ಜೀವವನ್ನು ಪಡೆದುಕೊಳ್ಳುತ್ತಾನೆ’’* ಎಂದು ಹೇಳುತ್ತದೆ.
13ಧರ್ಮಶಾಸ್ತ್ರವು ನಮ್ಮ ಮೇಲೆ ಶಾಪವನ್ನು ಬರಮಾಡುತ್ತದೆ.
ಆದರೆ ಕ್ರಿಸ್ತನು ಆ ಶಾಪವನ್ನು ತನ್ನ ಮೇಲೆ ತೆಗೆದುಕೊಂಡನು.
ಆತನು ನಮ್ಮ ಸ್ಥಾನವನ್ನು ತಾನೇ ತೆಗೆದುಕೊಂಡನು. ಕ್ರಿಸ್ತನು
ತನ್ನನ್ನೇ ಶಾಪಕ್ಕೆ ಒಳಪಡಿಸಿಕೊಂಡನು. ಪವಿತ್ರ ಗ್ರಂಥದಲ್ಲಿ
ಬರೆದಿರುವಂತೆ ‘‘ಮರಕ್ಕೆ ತೂಗುಹಾಕಲ್ಪಟ್ಟ ವ್ಯಕ್ತಿಯು ಶಾಪ
ಗ್ರಸ್ತನಾಗಿದ್ದಾನೆ.’’* 14ಎಲ್ಲಾ ಜನರಿಗೆ ದೇವರ ಆಶೀರ್ವಾದವು
ದೊರೆಯಲೆಂದು ಕ್ರಿಸ್ತನು ಹೀಗೆ ಮಾಡಿದನು. ಈ ಆಶೀರ್ವಾದ
ವನ್ನು ದೇವರು ಅಬ್ರಹಾಮನಿಗೆ ವಾಗ್ದಾನಮಾಡಿದ್ದನು. ಈ
ಆಶೀರ್ವಾದವು ಯೇಸು ಕ್ರಿಸ್ತನ ಮೂಲಕ ಬರುತ್ತದೆ. ದೇವರು
ವಾಗ್ದಾನ ಮಾಡಿದ ಪವಿತ್ರಾತ್ಮನನ್ನು ನಾವು ಹೊಂದಿಕೊಳ್ಳ
ಲೆಂದು ಯೇಸು ಮರಣ ಹೊಂದಿದನು. ನಂಬಿಕೆಯಿಡುವುದರ
ಮೂಲಕ ನಾವು ಈ ವಾಗ್ದಾನವನ್ನು ಪಡೆದುಕೊಳ್ಳುತ್ತೇವೆ.

## ಧರ್ಮಶಾಸ್ತ್ರ ಮತ್ತು ವಾಗ್ದಾನ

15ಸಹೋದರ ಸಹೋದರಿಯರೇ, ನಾನು ನಿಮಗೊಂದು
ಉದಾಹರಣೆಯನ್ನು ಕೊಡುತ್ತೇನೆ. ಒಬ್ಬನು ಇನ್ನೊಬ್ಬ
ನೊಂದಿಗೆ ಮಾಡಿಕೊಳ್ಳುವ ಒಪ್ಪಂದದ ಬಗ್ಗೆ ಯೋಚಿಸಿ. ಆ
ಒಪ್ಪಂದವು ಅಧಿಕೃತವಾದಾಗ ಅದನ್ನು ರದ್ದುಮಾಡುವುದ
ಕ್ಕಾಗಲಿ ಅಥವಾ ಅದಕ್ಕೆ ಬೇರೆ ಏನಾದರು ಸೇರಿಸುವುದಕ್ಕಾಗಲಿ
ಯಾರಿಗೂ ಸಾಧ್ಯವಿಲ್ಲ. 16ದೇವರು ಅಬ್ರಹಾಮನಿಗೂ ಅವನ
ಸಂತಾನದವರಿಗೂ ವಾಗ್ದಾನಗಳನ್ನು ಮಾಡಿದನು. ‘‘ನಿನ್ನ
ಸಂತತಿಗಳಿಗೆ’’ಎಂದು ದೇವರು ಹೇಳಲಿಲ್ಲ. ಏಕೆಂದರೆ ಅನೇಕ
ಜನರು ಎಂಬರ್ಥವನ್ನು ಅದು ಕೊಡುತ್ತದೆ. ಆದರೆ ದೇವರು
ಅವನಿಗೆ, ‘‘ನಿನ್ನ ಸಂತತಿಗೆ’’* ಎಂದು ಹೇಳಿದನು. ಅದರರ್ಥ
ವೇನೆಂದರೆ, ಒಬ್ಬನೇ ಒಬ್ಬ ವ್ಯಕ್ತಿ. ಆತನೇ ಕ್ರಿಸ್ತನು. 17ನಾನು
ಹೇಳುತ್ತಿರುವುದೇನೆಂದರೆ, ದೇವರು ಅಬ್ರಹಾಮನೊಂದಿಗೆ
ಒಂದು ಒಪ್ಪಂದವನ್ನು ಮಾಡಿಕೊಂಡು ಅದನ್ನು ಸ್ಥಿರಪಡಿಸಿ
ದನು. ಆದ್ದರಿಂದ ನಾನೂರ ಮೂವತ್ತು ವರ್ಷಗಳಾದ ನಂತರ
ಬಂದ ಧರ್ಮಶಾಸ್ತ್ರವು ಅಬ್ರಹಾಮನಿಗೆ ದೇವರು ಮಾಡಿದ
ವಾಗ್ದಾನವನ್ನು ರದ್ದುಪಡಿಸುವುದೂ ಇಲ್ಲ ಬದಲಾಯಿಸು
ವುದೂ ಇಲ್ಲ. 18ದೇವರು ವಾಗ್ದಾನಮಾಡಿದಂಥವುಗಳು
ಧರ್ಮಶಾಸ್ತ್ರದ ಅನುಸರಣೆಯಿಂದ ದೊರೆಯುತ್ತವೆಯೇ?
ಇಲ್ಲ! ಧರ್ಮಶಾಸ್ತ್ರವನ್ನು ಅನುಸರಿಸುವುದರ ಮೂಲಕ ನಾವು
ಅವುಗಳನ್ನು ಪಡೆದುಕೊಳ್ಳಬಹುದಾಗಿದ್ದರೆ ಅವುಗಳನ್ನು ನಮಗೆ
ಕೊಡುವಂಥದ್ದು ದೇವರ ವಾಗ್ದಾನವಲ್ಲ. ಆದರೆ ದೇವರು ತಾನು
ಮಾಡಿದ ವಾಗ್ದಾನದ ಮೂಲಕ ತನ್ನ ಆಶೀರ್ವಾದಗಳನ್ನು
ಅಬ್ರಹಾಮನಿಗೆ ಉಚಿತವಾಗಿ ಕೊಟ್ಟನು. 19ಹಾಗಾದರೆ ಧರ್ಮ

**ಧರ್ಮಶಾಸ್ತ್ರದಲ್ಲಿ … ಶಾಪಗ್ರಸ್ತನಾಗಿದ್ದಾನೆ.** ಧರ್ಮೋಪದೇಶ. 27:26.

**ನಂಬಿಕೆಯ … ಜೀವಿಸುವನು** ಹಬಕ್ಕೂಕ 2:4, ರೋಮಾಪುರ 1:17.

**ಈ ವಿಧಿನಿಯಮ … ಪಡೆದುಕೊಳ್ಳುತ್ತಾನೆ** ಯಾಜಕ. 18:5.

**ಮರಕ್ಕೆ … ಶಾಪಗ್ರಸ್ತನಾಗಿದ್ದಾನೆ.** ಧರ್ಮೋಪದೇಶ. 21:22-23.

**ನಿನ್ನ ಸಂತತಿಗೆ** ಆದಿಕಾಂಡ 12:7.

ಶಾಸ್ತ್ರವಿದ್ದದ್ದು ಯಾಕೆ? ಜನರ ಅಪರಾಧಗಳನ್ನು ತೋರಿಸು
ವುದಕ್ಕಾಗಿ ಧರ್ಮಶಾಸ್ತ್ರವನ್ನು ಕೊಡಲಾಯಿತು. ಅಬ್ರಹಾಮನ
ವಿಶೇಷ ಸಂತಾನವು ಬರುವ ತನಕ ಧರ್ಮಶಾಸ್ತ್ರವಿತ್ತು. ಈ
ಸಂತಾನದ (ಕ್ರಿಸ್ತನು) ಬಗ್ಗೆಯೇ ದೇವರು ವಾಗ್ದಾನ ಮಾಡಿ
ದನು. ಧರ್ಮಶಾಸ್ತ್ರವನ್ನು ದೇವದೂತರ ಮೂಲಕ ಕೊಡ
ಲಾಯಿತು. ಜನರಿಗೆ ಧರ್ಮಶಾಸ್ತ್ರವನ್ನು ಕೊಡುವುದಕ್ಕಾಗಿ ದೇವ
ದೂತರು ಮೋಶೆಯನ್ನು ಮಧ್ಯವರ್ತಿಯನ್ನಾಗಿ ಉಪಯೋಗಿ
ಸಿದರು. 20ಒಂದೇ ಪಕ್ಷವಿದ್ದರೆ ಮಧ್ಯಸ್ತನು ಬೇಕಿಲ್ಲ. ದೇವರು
ಒಬ್ಬನೇ.

## ಮೋಶೆಯ ಧರ್ಮಶಾಸ್ತ್ರದ ಉದ್ದೇಶ

21ಧರ್ಮಶಾಸ್ತ್ರವು ದೇವರ ವಾಗ್ದಾನಗಳಿಗೆ ವಿರೋಧವಾಗಿದೆ
ಎಂಬುದು ಇದರರ್ಥವೇ? ಇಲ್ಲ! ಜೀವವನ್ನು ಕೊಡುವಂಥ
ಧರ್ಮಶಾಸ್ತ್ರವಿದ್ದಿದ್ದರೆ ಅದನ್ನು ಅನುಸರಿಸುವುದರ ಮೂಲಕ
ನೀತಿವಂತರಾಗಬಹುದಾಗಿತ್ತು 22ಆದರೆ ಇದು ಸತ್ಯವಲ್ಲ.
ಏಕೆಂದರೆ ಸಮಸ್ತವೂ ಪಾಪಕ್ಕೆ ಒಳಗಾಗಿದೆ ಎಂದು ಪವಿತ್ರ ಗ್ರಂಥ
ಪ್ರಕಟಿಸುತ್ತದೆ. ಯೇಸು ಕ್ರಿಸ್ತನಲ್ಲಿ ನಂಬಿಕೆ ಇಡುವವರಿಗೆ ಅವರ
ನಂಬಿಕೆಯ ಆಧಾರದ ಮೇಲೆ ವಾಗ್ದಾನದ ಫಲವು
ದೊರೆಯಬೇಕೆಂದೇ ಪವಿತ್ರಗ್ರಂಥವು ಹೀಗೆ ಪ್ರಕಟಿಸಿದೆ. 23ಈ
ನಂಬಿಕೆಯು ಬರುವುದಕ್ಕಿಂತ ಮೊದಲು ನಾವು ಧರ್ಮಶಾಸ್ತ್ರಕ್ಕೆ
ಸೆರೆಯಾಳುಗಳಾಗಿದ್ದೆವು. ಬರಲಿದ್ದ ನಂಬಿಕೆಯ ಮಾರ್ಗವನ್ನು
ದೇವರು ನಮಗೆ ತೋರಿಸಿಕೊಡುವ ತನಕ ನಮಗೆ
ಸ್ವತಂತ್ರವಿರಲಿಲ್ಲ. 24ಆದ್ದರಿಂದ ಕ್ರಿಸ್ತನು ಬರುವ ತನಕ
ಧರ್ಮಶಾಸ್ತ್ರವು ನಮಗೆ ಯಜಮಾನನಾಗಿತ್ತು. ಕ್ರಿಸ್ತನು ಬಂದ
ತರುವಾಯ ನಾವು ನಂಬಿಕೆಯ ಮೂಲಕ ನೀತಿವಂತರಾಗಿರಲು
ಸಾಧ್ಯವಾಯಿತು. 25ಈಗ ನಂಬಿಕೆಯ ಮಾರ್ಗವು ಬಂದಿದೆ.
ಆದ್ದರಿಂದ ಈಗ ನಾವು ಧರ್ಮಶಾಸ್ತ್ರದ ಅಧೀನದಲ್ಲಿ
ಜೀವಿಸುವುದಿಲ್ಲ. 26-27ನೀವೆಲ್ಲರೂ ಕ್ರಿಸ್ತನಲ್ಲಿ ದೀಕ್ಷಾಸ್ನಾನ
ಮಾಡಿಸಿಕೊಂಡಿದ್ದರಿಂದ ಕ್ರಿಸ್ತನನ್ನೇ ಧರಿಸಿಕೊಂಡಿರಿ. ಕ್ರಿಸ್ತ
ಯೇಸುವಿನಲ್ಲಿ ನಂಬಿಕೆಯಿಡುವುದರ ಮೂಲಕ ನೀವೆಲ್ಲರೂ
ದೇವರ ಮಕ್ಕಳಾಗಿದ್ದೀರೆಂಬುದನ್ನು ಇದು ತೋರಿಸುತ್ತದೆ.
28ಈಗ ಕ್ರಿಸ್ತನಲ್ಲಿ ಯೆಹೂದ್ಯನು, ಗ್ರೀಕನು ಎಂಬ ವ್ಯತ್ಯಾಸವಿಲ್ಲ;
ಸ್ವತಂತ್ರರು ಮತ್ತು ಗುಲಾಮರು ಎಂಬ ವ್ಯತ್ಯಾಸವಿಲ್ಲ;
ಸ್ತ್ರೀಯರು ಮತ್ತು ಪುರುಷರು ಎಂಬ ವ್ಯತ್ಯಾಸವಿಲ್ಲ. ನೀವೆಲ್ಲರೂ
ಕ್ರಿಸ್ತ ಯೇಸುವಿನಲ್ಲಿ ಒಂದೇ ಆಗಿದ್ದೀರಿ. 29ನೀವು ಕ್ರಿಸ್ತ
ನವರಾಗಿದ್ದೀರಿ. ಆದ್ದರಿಂದ ನೀವು ಅಬ್ರಹಾಮನ ಸಂತಾನ
ದವರು. ದೇವರು ಅವನಿಗೆ ಮಾಡಿದ ವಾಗ್ದಾನದ ಪ್ರಕಾರ
ನೀವೆಲ್ಲರೂ ದೇವರ ಆಶೀರ್ವಾದಗಳನ್ನು ಪಡೆದುಕೊಳ್ಳುವಿರಿ.

4 ನಾನು ಮತ್ತೆ ಹೇಳುವುದೇನಂದರೆ: ಬಾಧ್ಯಸ್ತನು ಬಾಲಕ
ನಾಗಿರುವಾಗ ಅವನಿಗೂ ಗುಲಾಮನಿಗೂ ಯಾವ
ವ್ಯತ್ಯಾಸವೂ ಇಲ್ಲ. ಆಸ್ತಿಗೆಲ್ಲಾ ಒಡೆಯನಾಗಿದ್ದರೂ ಅವನು
ಗುಲಾಮನಂತಿರುವನು. 2ಏಕೆಂದರೆ ಅವನಿನ್ನೂ ಬಾಲಕನಾಗಿ
ರುವಾಗ ಪರಿಪಾಲಕರಿಗೆ ಮತ್ತು ನಿರ್ವಾಹಕರಿಗೆ ವಿಧೇಯ
ನಾಗಿರಬೇಕು. ಆದರೆ ತನ್ನ ತಂದೆಯು ಗೊತ್ತುಪಡಿಸಿದ
ವಯಸ್ಸನ್ನು ತಲುಪಿದಾಗ ಆ ಬಾಲಕನು ಸ್ವತಂತ್ರನಾಗುವನು.
3ಅದೇ ರೀತಿಯಲ್ಲಿ ನಾವು ಮೊದಲು ಮಕ್ಕಳಂತಿದ್ದೆವು. ಈ
ಪ್ರಪಂಚದ ಉಪಯೋಗವಿಲ್ಲದ ನಿಯಮಗಳಿಗೆ ನಾವು
ಗುಲಾಮರಾಗಿದ್ದೆವು. 4ಆದರೆ ತಕ್ಕ ಕಾಲ ಬಂದಾಗ ದೇವರು
ತನ್ನ ಮಗನನ್ನು ಕಳುಹಿಸಿದನು. ದೇವರ ಮಗನು ಸ್ತ್ರೀಯಲ್ಲಿ
ಜನಿಸಿ, ಧರ್ಮಶಾಸ್ತ್ರದ ಅಧೀನದಲ್ಲಿ ಜೀವಿಸಿದನು. 5ಧರ್ಮ
ಶಾಸ್ತ್ರದ ಅಧೀನದಲ್ಲಿದ್ದ ನಮ್ಮನ್ನು ಬಿಡಿಸಿ ತನ್ನ ಮಕ್ಕಳನ್ನಾಗಿ
ಮಾಡಿಕೊಳ್ಳಬೇಕೆಂಬುದೇ ದೇವರ ಉದ್ದೇಶವಾಗಿತ್ತು. 6ನೀವು
ದೇವರ ಮಕ್ಕಳು. ಆದಕಾರಣವೇ ದೇವರು ತನ್ನ ಆತ್ಮವನ್ನು ನಿಮ್ಮ
ಹೃದಯಗಳಿಗೆ ಕಳುಹಿಸಿದನು. ‘‘ತಂದೆಯೇ, ಅಪ್ಪಾ ತಂದೆಯೇ’’
ಎಂದು ಆತ್ಮನು ಕೂಗುತ್ತಾನೆ. 7ಆದ್ದರಿಂದ ಈಗ ನೀನು
ಮೊದಲಿನಂತೆ ಗುಲಾಮನಲ್ಲ. ನೀನು ದೇವರ ಮಗನು. ನೀನು
ದೇವರ ಮಗನಾಗಿರುವುದರಿಂದ ಆತನು ನಿನ್ನನ್ನು ಬಾಧ್ಯಸ್ತನ
ನ್ನಾಗಿಯೂ ಮಾಡಿದ್ದಾನೆ.

## ಗಲಾತ್ಯ ಕ್ರೈಸ್ತರ ಮೇಲೆ ಪೌಲನ ಪ್ರೀತಿ

8ಪೂರ್ವಕಾಲದಲ್ಲಿ ನೀವು ದೇವರನ್ನು ತಿಳಿಯದೆ ಸುಳ್ಳು
ದೇವರುಗಳಿಗೆ ಗುಲಾಮರಾಗಿದ್ದಿರಿ. 9ಈಗಲಾದರೊ ಸತ್ಯ
ದೇವರನ್ನು ತಿಳಿದಿದ್ದೀರಿ. ನಿಜವಾಗಿ ಹೇಳಬೇಕಾದರೆ, ನಿಮ್ಮನ್ನು
ತಿಳಿದಿರುವಾತನು ದೇವರೇ. ಹೀಗಿರಲಾಗಿ ಮೊದಲು ನೀವು
ಅನುಸರಿಸುತ್ತಿದ್ದ ಬಲಹೀನವೂ ನಿರುಪಯುಕ್ತವೂ ಆದ
ನಿಯಮಗಳಿಗೆ ನೀವು ಯಾಕೆ ಹಿಂತಿರುಗಬೇಕು? ಅವುಗಳಿಗೆ
ಮತ್ತೆ ಗುಲಾಮರಾಗಬೇಕೆಂದಿದ್ದೀರೊ? 10ವಿಶೇಷವಾದ ದಿನ
ಗಳ, ಮಾಸಗಳ, ಕಾಲ ಮಾನಗಳ ಮತ್ತು ವರ್ಷಗಳ ಕುರಿತು
ಧರ್ಮಶಾಸ್ತ್ರವು ಹೇಳುವ ಉಪದೇಶವನ್ನು ಇನ್ನೂ ಅನುಸರಿಸು
ತ್ತಿದ್ದೀರಿ. 11ನಿಮ್ಮ ವಿಷಯದಲ್ಲಿ ನನಗೆ ಭಯವಾಗಿದೆ. ನಿಮ
ಗೋಸ್ಕರ ನಾನು ಪಟ್ಟ ಪ್ರಯಾಸವು ವ್ಯರ್ಥವಾಗುವುದೆಂಬ
ಭಯ ನನಗಿದೆ.

12ಸಹೋದರ ಸಹೋದರಿಯರೇ, ನಾನೂ ನಿಮ್ಮಂತಿದ್ದೆನು.
ಆದ್ದರಿಂದ ದಯವಿಟ್ಟು ನನ್ನಂತೆ ಆಗಿರಿ. 13ಮೊದಲು ನೀವು
ನನಗೆ ಬಹು ಒಳ್ಳೆಯವರಾಗಿದ್ದಿರಿ. ನಾನು ನಿಮ್ಮ ಬಳಿಗೆ
ಮೊದಲನೆ ಸಲ ಬಂದದ್ದು ನನ್ನ ಅನಾರೋಗ್ಯದ ನಿಮಿತ್ತವೆಂದು
ನಿಮಗೆ ಗೊತ್ತಿದೆ. ನಾನು ನಿಮಗೆ ಸುವಾರ್ತೆಯನ್ನು ತಿಳಿಸಿದ್ದು
ಆವಾಗಲೇ. 14ನನ್ನ ಅನಾರೋಗ್ಯವು ನಿಮಗೆ ಹೊರೆಯಾಗಿತ್ತು.
ಆದರೆ ನೀವು ನನ್ನ ವಿಷಯದಲ್ಲಿ ಬೇಸರಮಾಡಿಕೊಳ್ಳಲಿಲ್ಲ.
ನೀವು ನನ್ನನ್ನು ಕಳುಹಿಸಿಬಿಡಲಿಲ್ಲ. ದೇವದೂತನೋ ಎಂಬಂತೆ
ನೀವು ನನ್ನನ್ನು ಸ್ವಾಗತಿಸಿದಿರಿ; ಸ್ವತಃ ಯೇಸು ಕ್ರಿಸ್ತನೋ ಎಂಬಂತೆ
ನನ್ನನ್ನು ಸ್ವೀಕರಿಸಿಕೊಂಡಿರಿ. 15ಆಗ ನೀವು ಬಹು
ಸಂತೋಷವುಳ್ಳವರಾಗಿದ್ದಿರಿ. ಆ ಆನಂದವು ಈಗ ಎಲ್ಲಿದೆ? ನನಗೆ
ಸಹಾಯ ಮಾಡಲು ನೀವು ಏನು ಬೇಕಾದರೂ ಮಾಡುವುದಕ್ಕೆ
ಸಿದ್ಧರಾಗಿದ್ದಿರೆಂಬುದು ನನ್ನ ನೆನಪಿನಲ್ಲಿದೆ. ಸಾಧ್ಯವಾಗಿದ್ದರೆ
ನಿಮ್ಮ ಕಣ್ಣುಗಳನ್ನೇ ಕಿತ್ತು ನನಗೆ ಕೊಟ್ಟುಬಿಡುತ್ತಿದ್ದಿರಿ. 16ನಾನು
ನಿಮಗೆ ಸತ್ಯವನ್ನು ಹೇಳುವುದರಿಂದ ಈಗ ನಿಮ್ಮ ಶತ್ರು
ವಾಗಿದ್ದೇನೋ? 17ನಿಮ್ಮನ್ನು ಒತ್ತಾಯಪಡಿಸುವುದಕ್ಕಾಗಿ ಆ
ಜನರು ಪ್ರಯಾಸಪಟ್ಟು ಕೆಲಸ ಮಾಡುತ್ತಿದ್ದಾರೆ, ಆದರೆ ಒಳ್ಳೆಯ
ಉದ್ದೇಶದಿಂದಲ್ಲ. ನೀವು ನಮಗೆ ವಿರುದ್ಧವಾಗಿ ತಿರುಗಿಬೀಳ
ಬೇಕೆಂದು ಅವರು ನಿಮ್ಮನ್ನು ಒತ್ತಾಯ ಪಡಿಸುತ್ತಿದ್ದಾರೆ. ನೀವು
ಅವರನ್ನೇ ಹೊರತು ಬೇರೆ ಯಾರನ್ನೂ ಅನುಸರಿಸಬಾರ
ದೆಂಬುದು ಅವರ ಅಪೇಕ್ಷೆ. ನಿಮ್ಮ ವಿಷಯದಲ್ಲಿ ಜನರು ಆಸಕ್ತಿ
ತೋರಿಸುವುದೇನೋ ಒಳ್ಳೆಯದು. 18ಆದರೆ ಅವರ

ಉದ್ದೇಶವು ಒಳ್ಳೆಯದಾಗಿದ್ದಾಗ ಮಾತ್ರ ನಿಮಗೆ ಒಳ್ಳೆಯ
ದಾಗುತ್ತದೆ. ಇದು ಸತ್ಯ. ನಾನು ನಿಮ್ಮೊಂದಿಗಿರುವಾಗಲೂ
ನಿಮ್ಮಿಂದ ದೂರವಿರುವಾಗಲೂ ಇದು ಸತ್ಯ. 19ನನ್ನ ಪ್ರಿಯ
ಮಕ್ಕಳೇ, ಪ್ರಸವವೇದನೆಪಡುವ ತಾಯಿಯಂತೆ ನಾನು ನಿಮ್ಮ
ವಿಷಯದಲ್ಲಿ ನೋವುಳ್ಳವನಾಗಿದ್ದೇನೆ. ನೀವು ನಿಜವಾಗಿಯೂ
ಕ್ರಿಸ್ತನಂತಾಗುವ ತನಕ ನನಗೆ ಈ ನೋವಿರುತ್ತದೆ. 20ಈಗ ನಾನು
ನಿಮ್ಮೊಂದಿಗಿದ್ದಿದ್ದರೆ ಬೇರೊಂದು ರೀತಿಯಲ್ಲಿ ತಿಳಿಸಬಹು
ದಾಗಿತ್ತು . ನಿಮ್ಮ ವಿಷಯದಲ್ಲಿ ಈಗ ಏನು ಮಾಡಬೇಕೊ
ನನಗೆ ತಿಳಿಯದು.

### ಹಾಗರಳ ಮತ್ತು ಸಾರಳ ಉದಾಹರಣೆ

21ನಿಮ್ಮಲ್ಲಿ ಕೆಲವರು ಮೋಶೆಯ ಧರ್ಮಶಾಸ್ತ್ರಕ್ಕೆ ಇನ್ನೂ
ಅಧೀನರಾಗಿರಲು ಇಷ್ಟಪಡುತ್ತೀರಿ. ಧರ್ಮಶಾಸ್ತ್ರವು ಏನು
ಹೇಳುತ್ತದೆಂಬುದು ನಿಮಗೆ ಗೊತ್ತಿದೆಯೋ? ನನಗೆ ತಿಳಿಸಿ.
22ಪವಿತ್ರ ಗ್ರಂಥವು ಹೇಳುವುದೇನಂದರೆ, ಅಬ್ರಹಾಮನಿಗೆ
ಇಬ್ಬರು ಗಂಡುಮಕ್ಕಳಿದ್ದರು. ಒಬ್ಬ ಮಗನ ತಾಯಿಯು ದಾಸತ್ವ
ದಲ್ಲಿದ್ದಳು. ಮತ್ತೊಬ್ಬ ಮಗನ ತಾಯಿಯು ಸ್ವತಂತ್ರಳಾಗಿದ್ದಳು.
23ಮಾನವ ಸಹಜವಾದ ರೀತಿಯಲ್ಲಿ ಅಬ್ರಹಾಮನ ಮಗನು ಆ
ದಾಸಿಯಲ್ಲಿ ಹುಟ್ಟಿದನು. ಸ್ವತಂತ್ರಳಾಗಿದ್ದ ಸ್ತ್ರೀಯಲ್ಲಿ ಹುಟ್ಟಿದ
ಮಗನಾದರೊ ದೇವರು ಅಬ್ರಹಾಮನಿಗೆ ಮಾಡಿದ ವಾಗ್ದಾನದ
ಫಲವಾಗಿದ್ದನು.

24ಈ ಸಂಗತಿಗಳು ನಮಗೆ ಉಪಮಾನವಾಗಿವೆ. ದೇವರ
ಮತ್ತು ಮನುಷ್ಯರ ನಡುವೆ ಆದ ಎರಡು ಒಪ್ಪಂದಗಳಿಗೆ ಈ
ಇಬ್ಬರು ಸ್ತ್ರೀಯರು ಸಂಕೇತವಾಗಿದ್ದಾರೆ. ಸೀನಾಯಿ ಪರ್ವತದ
ಮೇಲೆ ದೇವರು ಕೊಟ್ಟ ಧರ್ಮಶಾಸ್ತ್ರವೇ ಮೊದಲನೆ ಒಪ್ಪಂದ.
ಈ ಒಪ್ಪಂದದ ಅಧೀನದಲ್ಲಿದ್ದ ಜನರು ಗುಲಾಮರಂತಿದ್ದರು.
ತಾಯಿಯಾದ ಹಾಗರಳು ಆ ಒಪ್ಪಂದದಂತಿದ್ದಳು. 25ಆದ್ದರಿಂದ
ಹಾಗರಳು ಅರೇಬಿಯಾದಲ್ಲಿರುವ ಸೀನಾಯಿ ಪರ್ವತ
ದಂತಿದ್ದಾಳೆ. ಯೆಹೂದ್ಯರ ನಗರವಾದ ಜೆರುಸಲೇಮಿಗೆ
ಆಕೆಯು ಅನುರೂಪವಾಗಿದ್ದಾಳೆ. ಈ ನಗರವು ಗುಲಾಮ
ಗಿರಿಯಲ್ಲಿದೆ ಮತ್ತು ಅದರ ಜನರೆಲ್ಲರೂ ಧರ್ಮಶಾಸ್ತ್ರಕ್ಕೆ
ಗುಲಾಮರಾಗಿದ್ದಾರೆ. 26ಆದರೆ ಪರಲೋಕದಲ್ಲಿರುವ ಜೆರುಸ
ಲೇಮ್ ಸ್ವತಂತ್ರಳಾದ ಸ್ತ್ರೀಯಂತಿದೆ. ಇದೇ ನಮ್ಮ ತಾಯಿ.
27ಪವಿತ್ರ ಗ್ರಂಥದಲ್ಲಿ ಹೀಗೆ ಬರೆದಿದೆ:

> ‘‘ಮಕ್ಕಳನ್ನು ಹೆತ್ತಿಲ್ಲದ ಬಂಜೆಯೇ, ಸಂತೋಷ
> ಪಡು. ಪ್ರಸವ ವೇದನೆಯಿಲ್ಲದವಳೇ, ಸ್ವರವೆತ್ತಿ
> ಕೂಗು. ಗಂಡನುಳ್ಳವಳಿಗಿಂತ ಗಂಡ ಬಿಟ್ಟವಳಿಗೆ
> ಮಕ್ಕಳು ಹೆಚ್ಚು.’’
>
> *ಯೆಶಾಯ 54:1*

28-29ಅಬ್ರಹಾಮನ ಒಬ್ಬ ಮಗನು ಮಾನವ ಸಹಜವಾದ
ರೀತಿಯಲ್ಲಿ ಜನಿಸಿದನು. ಅಬ್ರಹಾಮನ ಮತ್ತೊಬ್ಬ ಮಗನು
ದೇವರ ವಾಗ್ದಾನದ ಫಲವಾಗಿ ದೇವರಾತ್ಮನ ಶಕ್ತಿಯಿಂದ
ಜನಿಸಿದನು. ನನ್ನ ಸಹೋದರ ಸಹೋದರಿಯರೇ, ನೀವು ಸಹ
ಇಸಾಕನಂತೆ ವಾಗ್ದಾನದ ಮಕ್ಕಳಾಗಿದ್ದೀರಿ. ಮಾನವ ಸಹಜವಾದ
ರೀತಿಯಲ್ಲಿ ಜನಿಸಿದ್ದ ಮಗನು ಮತ್ತೊಬ್ಬ ಮಗನನ್ನು ಹಿಂಸೆ
ಪಡಿಸಿದನು. ಇದೇ ಈಗಲೂ ನಡೆಯುತ್ತಿದೆ. 30ಆದರೆ ಪವಿತ್ರ
ಗ್ರಂಥವು ಏನು ಹೇಳುತ್ತದೆ? ‘‘ದಾಸಿಯನ್ನು ಮತ್ತು ಅವಳ
ಮಗನನ್ನು ಹೊರಗೆ ಹಾಕು; ಸ್ವತಂತ್ರಳಾದ ಸ್ತ್ರೀಯ ಮಗನು ತನ್ನ
ತಂದೆಯು ಹೊಂದಿರುವ ಪ್ರತಿಯೊಂದನ್ನು ಪಡೆದುಕೊಳ್ಳು
ವನು. ಆದರೆ ದಾಸಿಗೆ ಏನೂ ದೊರೆಯುವುದಿಲ್ಲ.’’ *
31ಆದ್ದರಿಂದ, ನನ್ನ ಸಹೋದರ ಸಹೋದರಿಯರೇ, ನಾವು
ದಾಸಿಯ ಮಕ್ಕಳಲ್ಲ. ನಾವು ಸ್ವತಂತ್ರಳಾದ ಸ್ತ್ರೀಯ
ಮಕ್ಕಳಾಗಿದ್ದೇವೆ.

### ಸ್ವತಂತ್ರರಾಗಿರಿ

5 ಈಗ ನಮಗೆ ಸ್ವತಂತ್ರವಿದೆ. ಕ್ರಿಸ್ತನು ನಮ್ಮನ್ನು
ಸ್ವತಂತ್ರರನ್ನಾಗಿ ಮಾಡಿದನು. ಆದ್ದರಿಂದ ದೃಢವಾಗಿರಿ.
ಮನಸ್ಸನ್ನು ಬದಲಾಯಿಸಿಕೊಂಡು ಮತ್ತೆ ಧರ್ಮಶಾಸ್ತ್ರದ
ಗುಲಾಮಗಿರಿಗೆ ಹೋಗಬೇಡಿರಿ. 2ಕೇಳಿ, ನಾನೇ ಪೌಲನು.
ನೀವು ಸುನ್ನತಿ ಮಾಡಿಸಿಕೊಂಡು ಧರ್ಮಶಾಸ್ತ್ರಕ್ಕೆ ಹಿಂತಿರುಗಿ
ಕೊಳ್ಳುವುದಾದರೆ ಕ್ರಿಸ್ತನಿಂದ ನಿಮಗೇನೂ ಪ್ರಯೋಜನವಿಲ್ಲ.
3ಮತ್ತೆ ನಾನು ಪ್ರತಿಯೊಬ್ಬನನ್ನೂ ಎಚ್ಚರಿಸುತ್ತೇನೆ. ನೀವು ಸುನ್ನತಿ
ಮಾಡಿಸಿಕೊಂಡರೆ, ಧರ್ಮಶಾಸ್ತ್ರವನ್ನೆಲ್ಲಾ ಅನುಸರಿಸಬೇಕು.
4ನೀವು ಧರ್ಮಶಾಸ್ತ್ರದ ಮೂಲಕ ನೀತಿವಂತರಾಗಲು
ಪ್ರಯತ್ನಿಸುವವರಾಗಿದ್ದರೆ, ದೇವರ ಕೃಪಾಶ್ರಯದಿಂದ ಬಿದ್ದು
ಹೋದ ಕಾರಣ ಕ್ರಿಸ್ತನೊಂದಿಗಿರುವ ನಿಮ್ಮ ಜೀವಿತವು ಅಂತ್ಯ
ಗೊಳ್ಳುವುದು. 5ಆದರೆ ನಾವು ನಂಬಿಕೆಯ ಮೂಲಕ ನೀತಿ
ವಂತರಾಗಿದ್ದೇವೆ ಎಂಬ ನಿರೀಕ್ಷೆ ನಮಗುಂಟು. ದೇವರಾತ್ಮನ
ಸಹಾಯದಿಂದ ಈ ನಿರೀಕ್ಷೆ ಸಫಲವಾಗುವುದೆಂದು ತವಕದಿಂದ
ಎದುರು ನೋಡುತ್ತಿದ್ದೇವೆ. 6ಒಬ್ಬನು ಕ್ರಿಸ್ತ ಯೇಸುವಿನಲ್ಲಿ
ರುವಾಗ ಸುನ್ನತಿ ಹೊಂದಿದ್ದಾನೋ ಇಲ್ಲವೋ ಎಂಬುದು
ಮುಖ್ಯವಲ್ಲ. ಮುಖ್ಯವಾದದ್ದೇನಂದರೆ ಪ್ರೀತಿಯಿಂದ ಕಾರ್ಯ
ನಡೆಸುವ ನಂಬಿಕೆ. 7ನೀವು ಚೆನ್ನಾಗಿ ಓಡುತ್ತಾ ಇದ್ದೀರಿ. ನೀವು
ಸತ್ಯಕ್ಕೆ ವಿಧೇಯರಾಗಿದ್ದೀರಿ. ಸತ್ಯಮಾರ್ಗವನ್ನು ಅನುಸರಿಸ
ದಂತೆ ನಿಮ್ಮನ್ನು ಒತ್ತಾಯಪಡಿಸಿದವರ್‍ಯಾರು? 8ಆ ಒತ್ತಾಯವು
ಬಂದದ್ದು ನಿಮ್ಮನ್ನು ಆರಿಸಿಕೊಂಡಾತನಿಂದಲ್ಲ. 9ಎಚ್ಚರಿಕೆ
ಯಿಂದಿರಿ! ‘‘ಸ್ವಲ್ಪ ಹುಳಿಯಿಂದ ಪಾತ್ರೆಯಲ್ಲಿರುವ ನಾದಿದ
ಹಿಟ್ಟೆಲ್ಲಾ ಹುಳಿಯಾಗುವುದು.’’ 10ಆ ಬೇರೆ ಅಭಿಪ್ರಾಯ
ಗಳನ್ನು ನೀವು ನಂಬುವುದಿಲ್ಲವೆಂದು ಪ್ರಭುವಿನಲ್ಲಿ ನಿಮ್ಮನ್ನು
ಕುರಿತು ಭರವಸೆಯಿಂದಿದ್ದೇನೆ. ಯಾರೊ ಒಬ್ಬನು ಆ ಅಭಿ
ಪ್ರಾಯಗಳಿಂದ ನಿಮ್ಮನ್ನು ಗಲಿಬಿಲಿಗೊಳಿಸುತ್ತಿದ್ದಾನೆ. ಅವನು
ಯಾರೇ ಆಗಿದ್ದರೂ ದಂಡನೆ ಹೊಂದುವನು. 11ನನ್ನ
ಸಹೋದರ ಸಹೋದರಿಯರೇ, ಜನರು ಸುನ್ನತಿ ಮಾಡಿಸಿಕೊಳ್ಳ
ಬೇಕೆಂದು ನಾನು ಬೋಧಿಸುವುದಿಲ್ಲ. ಸುನ್ನತಿಯ ಅಗತ್ಯತೆ
ಯನ್ನು ಕುರಿತು ಉಪದೇಶಿಸುವವನಾಗಿದ್ದರೆ, ನಾನಿನ್ನೂ ಹಿಂಸೆಗೆ
ಒಳಗಾಗಿರುವುದೇಕೆ? ಜನರು ಸುನ್ನತಿ ಮಾಡಿಸಿಕೊಳ್ಳಬೇಕೆಂದು
ನಾನಿನ್ನೂ ಉಪದೇಶಿಸುವುದಾಗಿದ್ದರೆ, ಶಿಲುಬೆಯ ವಿಷಯ
ವಾದ ನನ್ನ ಬೋಧನೆಗೆ ಅಡ್ಡಿಯಾಗುವುದೇ ಇಲ್ಲ. 12ನಿಮ್ಮನ್ನು
ಕಳವಳಪಡಿಸುತ್ತಿರುವವರು ತಮಗಾಗಿರುವ ಸುನ್ನತಿಯಲ್ಲದೆ
ತಮ್ಮ ಅಂಗವನ್ನೇ ಕತ್ತರಿಸಿಕೊಂಡರೆ ಒಳ್ಳೆಯದು. 13ನನ್ನ

---

**ದಾಸಿಯನ್ನು … ದೊರೆಯುವುದಿಲ್ಲ** ಆದಿಕಾಂಡ 21:10.

ಸಹೋದರ ಸಹೋದರಿಯರೇ, ನೀವು ಸ್ವತಂತ್ರರಾಗಬೇಕೆಂದು
ದೇವರು ನಿಮ್ಮನ್ನು ಕರೆದಿದ್ದಾನೆ. ಆದರೆ ಪಾಪಮಯವಾದ
ನಿಮ್ಮ ಸ್ವಭಾವವನ್ನು ಮೆಚ್ಚಿಸುವುದಕ್ಕಾಗಿ ನಿಮ್ಮ ಸ್ವತಂತ್ರವನ್ನು
ನೆಪಮಾಡಿಕೊಳ್ಳಬೇಡಿ. ಆದರೆ ಪ್ರೀತಿಯಿಂದ ಒಬ್ಬರ ಸೇವೆಯ
ನ್ನೊಬ್ಬರು ಮಾಡಿರಿ. 14“ನೀವು ನಿಮ್ಮನ್ನು ಪ್ರೀತಿಸುವಂತೆ
ಇತರರನ್ನು ಪ್ರೀತಿಸಿರಿ”* ಎಂಬ ಒಂದೇ ಒಂದು ಆಜ್ಞೆಯಲ್ಲಿ
ಇಡೀ ಧರ್ಮಶಾಸ್ತ್ರವೇ ಅಡಕವಾಗಿದೆ. 15ನೀವು ಒಬ್ಬರನ್ನೊ
ಬ್ಬರು ಕಚ್ಚಿ ಹರಿದುಹಾಕಿ ನುಂಗುವುದಾದರೆ ಒಬ್ಬರಿಂದೊಬ್ಬರು
ನಾಶವಾಗುತ್ತೀರಿ. ಆದ್ದರಿಂದ ಎಚ್ಚರಿಕೆಯಿಂದಿರಿ!

## ದೇವರಾತ್ಮನು ಮತ್ತು ಮಾನವ ಸ್ವಭಾವ

16ಆದ್ದರಿಂದ ನಾನು ನಿಮಗೆ ಹೇಳುವುದೇನಂದರೆ,
ಪವಿತ್ರಾತ್ಮನನ್ನು ಅನುಸರಿಸುವವರಾಗಿರಿ. ಆಗ, ನಿಮ್ಮ ಶರೀರ
ಭಾವವು ಬಯಸುವ ಕೆಟ್ಟ ಸಂಗತಿಗಳನ್ನು ನೀವು ಮಾಡುವುದಿಲ್ಲ.
17ನಮ್ಮ ಶರೀರಭಾವವು ದೇವರಾತ್ಮನಿಗೆ ವಿರುದ್ಧವಾದ ಸಂಗತಿ
ಗಳನ್ನು ಬಯಸುತ್ತದೆ. ದೇವರಾತ್ಮನು ನಮ್ಮ ಶರೀರಭಾವಕ್ಕೆ
ವಿರುದ್ಧವಾದ ಸಂಗತಿಗಳನ್ನು ಬಯಸುತ್ತಾನೆ. ಆದ್ದರಿಂದ ನೀವು
ನಿಜವಾಗಿಯೂ ಬಯಸುವಂಥವುಗಳನ್ನು ಮಾಡಲಾಗದಂತೆ
ಅವು ಒಂದೊಕ್ಕೊಂದು ಹೋರಾಡುತ್ತವೆ. 18ಆದರೆ ನೀವು
ನಿಮ್ಮನ್ನು ದೇವರಾತ್ಮನ ನಡೆಸುವಿಕೆಗೆ ಒಪ್ಪಿಸಿಕೊಟ್ಟರೆ ನೀವು
ಧರ್ಮಶಾಸ್ತ್ರದ ಅಧೀನದಲ್ಲಿಲ್ಲ. 19ನಮ್ಮ ಶರೀರಭಾವವು
ಮಾಡುವ ಕೆಟ್ಟಸಂಗತಿಗಳು ಸ್ಪಷ್ಟವಾಗಿವೆ. ಜಾರತ್ವ, ಅಶುದ್ಧತ್ವ,
ಲೈಂಗಿಕ ಪಾಪ, 20ಸುಳ್ಳುದೇವರುಗಳ ಆರಾಧನೆ, ಮಾಟಮಂತ್ರ,
ದ್ವೇಷ, ಜಗಳ, ಹೊಟ್ಟೆಕಿಚ್ಚು, ಕಡುಕೋಪ, ಸ್ವಾರ್ಥ, ಸಿಟ್ಟು,
ಕಕ್ಷಭೇದ, 21ಮತ್ಸರ, ಕುಡಿಕತನ, ಮತ್ತು ಸ್ವೇಚ್ಛಾಚಾರದ
ಕೂಟ, ಮೊದಲಾದವುಗಳೇ. ನಾನು ನಿಮ್ಮನ್ನು ಮೊದಲು
ಎಚ್ಚರಿಸಿದಂತೆ ಈಗಲೂ ಎಚ್ಚರಿಸುತ್ತೇನೆ. ಇಂಥವುಗಳನ್ನು
ಮಾಡುವ ಜನರು ದೇವರ ರಾಜ್ಯಕ್ಕೆ ಬಾಧ್ಯರಾಗುವುದಿಲ್ಲ.
22ಆದರೆ ದೇವರಾತ್ಮನು ಹುಟ್ಟಿಸುವುದು ಪ್ರೀತಿ, ಆನಂದ,
ಶಾಂತಿ, ತಾಳ್ಮೆ, ಕರುಣೆ, ಉಪಕಾರ, ನಂಬಿಗಸ್ತಿಕೆ, 23ಸಾಧುತ್ವ,
ಇಂದ್ರಿಯ ನಿಗ್ರಹ ಇಂಥವುಗಳೇ. ಇವುಗಳನ್ನು ತಪ್ಪೆಂದು ಯಾವ
ಧರ್ಮಶಾಸ್ತ್ರವು ಹೇಳುವುದಿಲ್ಲ. 24ಕ್ರಿಸ್ತಯೇಸುವಿನವರು ತಮ್ಮ
ಶರೀರಭಾವವನ್ನು ಶಿಲುಬೆಗೇರಿಸಿದ್ದಾರೆ. ಅವರು ತಮ್ಮ ಹಳೆಯ
ಸ್ವಾರ್ಥಪರವಾದ ಅಭಿಲಾಷೆಗಳನ್ನು ಮತ್ತು ತಾವು ಮಾಡ
ಬೇಕೆಂದಿದ್ದ ಕೆಟ್ಟ ಕಾರ್ಯಗಳನ್ನು ಬಿಟ್ಟುಕೊಟ್ಟವರಾಗಿದ್ದಾರೆ.
25ನಮ್ಮ ಹೊಸ ಜೀವಿತವನ್ನು ಪವಿತ್ರಾತ್ಮನಿಂದ ಪಡೆದುಕೊಂಡಿ
ರುವುದರಿಂದ ನಾವು ಆತನನ್ನೇ ಅನುಸರಿಸಬೇಕು. 26ನಾವು
ಅಹಂಕಾರಿಗಳಾಗಬಾರದು, ಒಬ್ಬರನ್ನೊಬ್ಬರು ಕೆಣಕುವವ
ರಾಗಬಾರದು, ಒಬ್ಬರಮೇಲೊಬ್ಬರು ಮತ್ಸರ ಉಳ್ಳವರಾಗ
ಬಾರದು.

## ಒಬ್ಬರಿಗೊಬ್ಬರು ಸಹಾಯ ಮಾಡಿರಿ

6 ಸಹೋದರ ಸಹೋದರಿಯರೇ, ನಿಮ್ಮ ಸಭೆಯಲ್ಲಿ
ಯಾವನಾದರೂ ತಪ್ಪು ಮಾಡಿದರೆ, ಆತ್ಮಿಕರಾದ ನೀವು
ಅವನ ಬಳಿಗೆ ಹೋಗಿ ಸೌಮ್ಯತೆಯಿಂದ ಅವನನ್ನು ತಿದ್ದಿ
ಸರಿಪಡಿಸಬೇಕು. ಆದರೆ ಎಚ್ಚರಿಕೆಯಿಂದಿರಿ! ನೀವು ಸಹ
ಶೋಧನೆಗೊಳಗಾಗಿ ಪಾಪಕ್ಕೆ ಬೀಳುವ ಸಾಧ್ಯವಿದೆ. 2ನಿಮ್ಮ
ಭಾರವಾದ ಹೊರೆಗಳನ್ನು ಹೊರಲು ಒಬ್ಬರಿಗೊಬ್ಬರು
ಸಹಾಯಮಾಡಿರಿ. ಹೀಗೆ ನೀವು ಕ್ರಿಸ್ತನ ಆಜ್ಞೆಯನ್ನು ನಿಜ
ವಾಗಿಯೂ ಅನುಸರಿಸಿರಿ. 3ಯಾವನಾದರೂ ತಾನು ಪ್ರಾಮುಖ್ಯ
ನಲ್ಲದ್ದಿದ್ದರೂ ತನ್ನನ್ನು ಪ್ರಾಮುಖ್ಯನೆಂದು ಭಾವಿಸಿಕೊಂಡರೆ
ಅವನು ತನ್ನನ್ನೇ ಮೋಸಪಡಿಸಿಕೊಳ್ಳುತ್ತಾನೆ. ಒಬ್ಬನು ತನ್ನನ್ನು
ಮತ್ತೊಬ್ಬನೊಡನೆ ಹೋಲಿಸಿಕೊಳ್ಳಕೂಡದು. 4ಪ್ರತಿಯೊಬ್ಬ
ವ್ಯಕ್ತಿಯು ತನ್ನ ನಡತೆಯನ್ನು ತಾನೇ ವಿಮರ್ಶಿಸಿಕೊಳ್ಳಲಿ. ಆಗ
ಅವನು ತನ್ನ ಕಾರ್ಯಗಳ ಬಗ್ಗೆ ಹೆಚ್ಚಳಪಡಲು ಸಾಧ್ಯ
ವಾಗುವುದು.
5ಪ್ರತಿಯೊಬ್ಬನು ತನ್ನ ಜವಾಬ್ದಾರಿಕೆಯನ್ನು ತಾನೇ ಹೊತ್ತು
ಕೊಳ್ಳಬೇಕು. 6ದೇವರ ವಾಕ್ಯವನ್ನು ಕಲಿತುಕೊಳ್ಳುವವನು,
(ತನಗೆ) ಕಲಿಸುವವನಿಗೆ ತನ್ನಲ್ಲಿರುವ ಎಲ್ಲಾ ಒಳ್ಳೆತನಗಳಲ್ಲಿ
ಪಾಲುಕೊಡತಕ್ಕದ್ದು.

## ಜೀವನವು ಜಮೀನಿನಲ್ಲಿ ಬಿತ್ತುವಂತಿದೆ

7ಮೋಸಹೋಗಬೇಡಿರಿ! ನೀವು ದೇವರನ್ನು ವಂಚಿಸಲು
ಸಾಧ್ಯವಿಲ್ಲ. ಒಬ್ಬನು ತಾನು ಏನು ಬಿತ್ತುತ್ತಾನೋ ಅದನ್ನೇ
ಕೊಯ್ಯುತ್ತಾನೆ. 8ಒಬ್ಬನು ತನ್ನ ಶರೀರಭಾವವನ್ನು ತೃಪ್ತಿಪಡಿಸು
ವುದಕ್ಕಾಗಿ ಪಾಪ ಕಾರ್ಯಗಳನ್ನು ಮಾಡಿದರೆ ಆ ಶರೀರಭಾವವು
ಅವನಿಗೆ ನಿತ್ಯನಾಶವನ್ನು ಬರಮಾಡುತ್ತದೆ. ಆದರೆ ಒಬ್ಬನು
ಪವಿತ್ರಾತ್ಮನನ್ನು ಮೆಚ್ಚಿಸುವುದಕ್ಕಾಗಿ ಒಳ್ಳೆಯ ಕಾರ್ಯಗಳನ್ನು
ಮಾಡುವುದಾಗಿದ್ದಾರೆ, ಅವನು ಪವಿತ್ರಾತ್ಮನಿಂದ ನಿತ್ಯಜೀವ
ವನ್ನು ಹೊಂದಿಕೊಳ್ಳುವನು. 9ನಾವು ಒಳ್ಳೆಯ ಕಾರ್ಯ
ಮಾಡುವುದರಲ್ಲಿ ಬೇಸರಗೊಳ್ಳಬಾರದು. ತಕ್ಕ ಸಮಯದಲ್ಲಿ
ನಾವು ನಿತ್ಯಜೀವವೆಂಬ ಸುಗ್ಗಿಯನ್ನು ಪಡೆಯುವೆವು. ಆದ್ದರಿಂದ
ಒಳ್ಳೆಯ ಕಾರ್ಯ ಮಾಡುವುದನ್ನು ನಾವು ಬಿಟ್ಟುಬಿಡಬಾರದು.
10ಯಾರಿಗಾದರೂ ಒಳ್ಳೆಯದನ್ನು ಮಾಡಲು ಅವಕಾಶ
ವಿರುವಾಗ ನಾವು ಮಾಡಲೇಬೇಕು. ಅದರಲ್ಲೂ ಒಂದೇ
ಕುಟುಂಬದವರಂತಿರುವ ವಿಶ್ವಾಸಿಗಳ ಬಗ್ಗೆ ನಾವು ವಿಶೇಷವಾದ
ಗಮನ ಕೊಡಬೇಕು.

## ಪೌಲನ ಕಡೇ ಮಾತುಗಳು

11ಇದನ್ನು ನಾನೇ ಕೈಯಾರೆ ಬರೆಯುತ್ತಿದ್ದೇನೆ. ನಾನು ಎಷ್ಟು
ದೊಡ್ಡ ಅಕ್ಷರಗಳಲ್ಲಿ ಬರೆಯುತ್ತಿದ್ದೇನೆಂಬುದನ್ನು ನೋಡಿರಿ.
12ನೀವು ಸುನ್ನತಿ ಮಾಡಿಸಿಕೊಳ್ಳಬೇಕೆಂದು ಕೆಲವರು ನಿಮ್ಮನ್ನು
ಒತ್ತಾಯಿಸುತ್ತಿದ್ದಾರೆ. ತಮ್ಮನ್ನು (ಯೆಹೂದ್ಯರು) ಸ್ವೀಕರಿಸಿ
ಕೊಳ್ಳಲಿ ಎಂಬುದೇ ಅವರ ಉದ್ದೇಶ. ಕ್ರಿಸ್ತನ ಶಿಲುಬೆಯ
ದೆಸೆಯಿಂದ ತಾವು ಹಿಂಸೆಗೆ ಒಳಗಾಗಬಹುದೆಂಬ ಭಯದಿಂದ
ಅವರು ಹೀಗೆ ಮಾಡುತ್ತಾರೆ. 13ಸುನ್ನತಿ ಮಾಡಿಸಿಕೊಂಡಿರುವ
ಅವರೇ ಧರ್ಮಶಾಸ್ತ್ರಕ್ಕೆ ವಿಧೇಯರಾಗುತ್ತಿಲ್ಲ. ಆದರೆ ನಿಮಗೂ
ಸುನ್ನತಿ ಮಾಡಿಸಿ ಅದರ ಬಗ್ಗೆ ಹೆಚ್ಚಳಪಡಬೇಕೆಂಬುದೇ ಅವರ
ಆಸೆ. 14ಅಂಥ ವಿಷಯಗಳ ಬಗ್ಗೆ ನಾನು ಹೆಚ್ಚಳಪಡುವುದೇ ಇಲ್ಲ.
ನಾನು ಹೆಮ್ಮೆಪಡಲು ನನಗಿರುವ ಒಂದೇ ಕಾರಣವೇನಂದರೆ
ನಮ್ಮ ಪ್ರಭುವಾದ ಯೇಸು ಕ್ರಿಸ್ತನ ಶಿಲುಬೆಯೊಂದೇ.
ಶಿಲುಬೆಯ ಮೇಲೆ ಯೇಸುವಿಗಾದ ಮರಣದ ಮೂಲಕ

---

**ನೀವು … ಪ್ರೀತಿಸಿರಿ** ಯಾಜಕ 19:18.

ಲೋಕವು ನನ್ನ ಪಾಲಿಗೆ ಸತ್ತುಹೋಯಿತು. ನಾನು ಸಹ
ಲೋಕದ ಪಾಲಿಗೆ ಸತ್ತುಹೋದೆನು. [15]ಒಬ್ಬನಿಗೆ ಸುನ್ನತಿ
ಯಾಗಿದೆಯೋ ಸುನ್ನತಿಯಾಗಿಲ್ಲವೋ ಎಂಬುದು ಮುಖ್ಯವಲ್ಲ.
ಆದರೆ ದೇವರಿಂದ ಹೊಸ ಸೃಷ್ಟಿಯಾಗಿರುವುದೇ ಮುಖ್ಯ
ವಾದದ್ದು. [16]ಈ ನಿಯಮವನ್ನು ಅನುಸರಿಸುವವರಿಗೆಲ್ಲ,
ಅಂದರೆ ನಿಜ ಇಸ್ರೇಲರಾದ ದೇವಜನರಿಗೆಲ್ಲ ಶಾಂತಿಯೂ
ಕರುಣೆಯೂ ಆಗಲಿ. [17]ಆದ್ದರಿಂದ ಇನ್ನು ಮೇಲೆ ನನಗೆ
ತೊಂದರೆ ಕೊಡಬೇಡಿ. ನನ್ನ ದೇಹದ ಮೇಲೆ ಬಾಸುಂಡೆಯ
ಗುರುತುಗಳಿವೆ . ನಾನು ಕ್ರಿಸ್ತನವನೆಂಬುದಕ್ಕೆ ಈ ಗುರುತುಗಳೇ
ಸಾಕ್ಷಿ. [18]ನನ್ನ ಸಹೋದರ ಸಹೋದರಿಯರೇ, ನಮ್ಮ ಪ್ರಭು
ವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮ ಆತ್ಮದೊಂದಿಗಿರಲೆಂದು
ಪ್ರಾರ್ಥಿಸುತ್ತೇನೆ. ಆಮೆನ್.

# ಎಫೆಸದವರಿಗೆ ಬರೆದ ಪತ್ರ

1 ಕ್ರಿಸ್ತ ಯೇಸುವಿನ ಅಪೊಸ್ತಲನಾಗಿರುವ ಪೌಲನು
ಬರೆಯುವ ಪತ್ರ. ನಾನು ದೇವರ ಇಷ್ಟಾನುಸಾರವಾಗಿ
ಅಪೊಸ್ತಲನಾಗಿದ್ದೇನೆ. ಎಫೆಸ* ಪಟ್ಟಣದಲ್ಲಿ ವಾಸವಾಗಿರುವ
ಮತ್ತು ಕ್ರಿಸ್ತ ಯೇಸುವಿನಲ್ಲಿ ನಂಬಿಕೆಯಿಟ್ಟಿರುವ ಪರಿಶುದ್ಧ
ದೇವಜನರಿಗೆ ನಾನು ಈ ಪತ್ರವನ್ನು ಬರೆಯುತ್ತಿದ್ದೇನೆ.
2ನಮ್ಮ ತಂದೆಯಾದ ದೇವರು ಮತ್ತು ಪ್ರಭುವಾದ ಯೇಸು
ಕ್ರಿಸ್ತನು ನಿಮಗೆ ಕೃಪೆಯನ್ನೂ ಶಾಂತಿಯನ್ನೂ ದಯಪಾಲಿಸಲಿ.

## ಕ್ರಿಸ್ತನಲ್ಲಿರುವ ಆತ್ಮಿಕ ಆಶೀರ್ವಾದಗಳು

3ನಮ್ಮ ಪ್ರಭುವಾದ ಯೇಸು ಕ್ರಿಸ್ತನ ದೇವರೂ ತಂದೆಯೂ
ಆಗಿರುವಾತನಿಗೆ ಸ್ತೋತ್ರವಾಗಲಿ. ಪರಲೋಕದಲ್ಲಿರುವ ಪ್ರತಿ
ಯೊಂದು ಆಶೀರ್ವಾದಗಳನ್ನು ದೇವರು ನಮಗೆ ಕ್ರಿಸ್ತನಲ್ಲಿ
ದಯಪಾಲಿಸಿದ್ದಾನೆ. 4ಜಗತ್ತು ಸೃಷ್ಟಿಯಾಗುವುದಕ್ಕಿಂತ
ಮೊದಲೇ ದೇವರು ನಮ್ಮನ್ನು ಕ್ರಿಸ್ತನಲ್ಲಿ ಆರಿಸಿಕೊಂಡನು. ತನ್ನ
ಸನ್ನಿಧಿಯಲ್ಲಿ ನಾವು ಪರಿಶುದ್ಧರೂ ನಿರ್ದೋಷಿಗಳೂ
ಆಗಿರಬೇಕೆಂಬುದು ಆತನ ಉದ್ದೇಶವಾಗಿತ್ತು. 5ನಮ್ಮ ಮೇಲಿನ
ಪ್ರೀತಿಯಿಂದ ಕ್ರಿಸ್ತ ಯೇಸುವಿನ ಮೂಲಕ ನಮ್ಮನ್ನು ತನ್ನ ಸ್ವಂತ
ಮಕ್ಕಳನ್ನಾಗಿ ಮಾಡಿಕೊಳ್ಳಲು ಆತನು ಆಗಲೇ ನಿರ್ಧರಿಸಿದ್ದನು.
ಅದು ಆತನ ಚಿತ್ತವಾಗಿತ್ತು ಮತ್ತು ಆತನಿಗೆ ಮೆಚ್ಚಿಕೆಕರವಾಗಿತ್ತು.
6ದೇವರ ಅದ್ಭುತವಾದ ಕೃಪೆಯಿಂದಾದ ಈ ನಿರ್ಧಾರವು ಆತನಿಗೆ
ಸ್ತೋತ್ರವನ್ನು ಉಂಟುಮಾಡುತ್ತದೆ. ದೇವರು ಆ ಕೃಪೆಯನ್ನು
ತನ್ನ ಪ್ರಿಯನಾದ ಕ್ರಿಸ್ತನಲ್ಲಿ ನಮಗೆ ಉಚಿತವಾಗಿ ದಯಪಾಲಿಸಿ
ದ್ದಾನೆ. 7ಕ್ರಿಸ್ತನ ರಕ್ತದ ಮೂಲಕವಾಗಿ ನಮಗೆ ಬಿಡುಗಡೆ
ಯಾಯಿತು. ದೇವರ ಮಹಾಕೃಪೆಯಿಂದ ನಮ್ಮ ಪಾಪಗಳು
ಕ್ಷಮಿಸಲ್ಪಟ್ಟವು. 8ದೇವರು ನಮಗೆ ಆ ಕೃಪೆಯನ್ನು ಸಂಪೂರ್ಣ
ವಾಗಿಯೂ ಉಚಿತವಾಗಿಯೂ ತೋರಿದನು. ದೇವರು ತನ್ನ
ರಹಸ್ಯವಾದ ಯೋಜನೆಯನ್ನು ನಮಗೆ ತಿಳಿಸುವುದರ ಮೂಲಕ
ನಮಗೆ ಸಂಪೂರ್ಣವಾದ ಜ್ಞಾನವನ್ನೂ ತಿಳುವಳಿಕೆಯನ್ನೂ
ಕೊಟ್ಟನು. 9ಇದು ದೇವರ ಚಿತ್ತವಾಗಿತ್ತು. ಕ್ರಿಸ್ತನ ಮೂಲಕ
ಇದನ್ನು ನೆರವೇರಿಸಲು ಆತನು ಯೋಜನೆ ಮಾಡಿದನು.
10ಕಾಲವು ಪರಿಪೂರ್ಣವಾದಾಗ ಭೂಪರಲೋಕಗಳಲ್ಲಿರುವ
ಸಮಸ್ತವನ್ನೂ ಕ್ರಿಸ್ತನಲ್ಲಿ ಒಂದುಗೂಡಿಸಿ ಆತನಿಗೆ ಅಧೀನ
ಪಡಿಸಬೇಕೆಂಬುದೇ ದೇವರ ಯೋಜನೆಯಾಗಿತ್ತು. 11ನಾವು
ದೇವರ ಮಕ್ಕಳಾಗಿರಬೇಕೆಂದು ಕ್ರಿಸ್ತನಲ್ಲಿ ನಮ್ಮನ್ನು ಆರಿಸಿ
ಕೊಳ್ಳಲಾಯಿತು. ನಾವು ತನ್ನ ಮಕ್ಕಳಾಗಿರಬೇಕೆಂದು ದೇವರು
ತನ್ನ ಚಿತ್ತಾನುಸಾರವಾಗಿ ಮೊದಲೇ ಯೋಜನೆ ಮಾಡಿದ್ದನು.
ತನ್ನ ನಿರ್ಧಾರ ಮತ್ತು ಇಷ್ಟಗಳಿಗನುಸಾರವಾಗಿ ಪ್ರತಿಯೊಂದನ್ನು
ನೆರವೇರಿಸುವಾತನು ದೇವರೇ. 12ಕ್ರಿಸ್ತನನ್ನು ನಿರೀಕ್ಷಿಸಿ
ಕೊಂಡಿರುವವರಲ್ಲಿ ನಾವೇ ಮೊದಲಿಗರು. ದೇವರ ಮಹಿಮೆಗೆ
ಸ್ತೋತ್ರವನ್ನು ಉಂಟು ಮಾಡಬೇಕೆಂದೇ ನಮ್ಮನ್ನು
ಆರಿಸಿಕೊಳ್ಳಲಾಯಿತು. 13ಇದು ನಿಮಗೂ ಅನ್ವಯಿಸುತ್ತದೆ.
ನೀವು ಸತ್ಯ ಬೋಧನೆಯ ಬಗ್ಗೆ ಅಂದರೆ ನಿಮ್ಮ ರಕ್ಷಣೆಯ
ಕುರಿತಾದ ಸುವಾರ್ತೆಯ ಬಗ್ಗೆ ಕೇಳಿದಾಗ ಕ್ರಿಸ್ತನಲ್ಲಿ
ನಂಬಿಕೆಯಿಟ್ಟಿರಿ. ದೇವರು ತನ್ನ ವಾಗ್ದಾನಕ್ಕನುಸಾರವಾಗಿ
ನಿಮಗೆ ಪವಿತ್ರಾತ್ಮನನ್ನು ದಯಪಾಲಿಸುವುದರ ಮೂಲಕ ನಿಮ್ಮ
ಮೇಲೆ ತನ್ನ ವಿಶೇಷವಾದ ಮುದ್ರೆಯನ್ನು ಹಾಕಿದನು.
14ದೇವರು ತನ್ನ ಜನರಿಗೆ ವಾಗ್ದಾನ ಮಾಡಿದವುಗಳನ್ನು ನಾವು
ಹೊಂದಿಕೊಳ್ಳುತ್ತೇವೆ ಎಂಬುದಕ್ಕೆ ಆ ಪವಿತ್ರಾತ್ಮನೇ ಪ್ರಮಾಣ
ವಾಗಿದ್ದಾನೆ. ದೇವರು ಸಂಪಾದಿಸಿಕೊಂಡ ಜನರಿಗೆ ಇದು
ಸಂಪೂರ್ಣ ವಿಮೋಚನೆಯನ್ನು ಉಂಟುಮಾಡುತ್ತದೆ. ದೇವರ
ಮಹಿಮೆಗೆ ಸ್ತೋತ್ರವಾಗಬೇಕೆಂಬುದೇ ಇದೆಲ್ಲದರ ಉದ್ದೇಶ
ವಾಗಿದೆ.

## ಪೌಲನ ಪ್ರಾರ್ಥನೆ

15-16ಆದಕಾರಣವೇ ನನ್ನ ಪ್ರಾರ್ಥನೆಗಳಲ್ಲಿ ನಾನು ನಿಮ್ಮನ್ನು
ಜ್ಞಾಪಿಸಿಕೊಂಡು ನಿಮ್ಮ ವಿಷಯದಲ್ಲಿ ದೇವರಿಗೆ ಯಾವಾಗಲೂ
ಸ್ತೋತ್ರ ಸಲ್ಲಿಸುತ್ತೇನೆ. ಪ್ರಭುವಾದ ಯೇಸುವಿನಲ್ಲಿ ನಿಮಗಿರುವ
ನಂಬಿಕೆಯ ಬಗ್ಗೆ ಮತ್ತು ಎಲ್ಲಾ ದೇವಜನರ ಮೇಲೆ ನಿಮಗಿರುವ
ಪ್ರೀತಿಯ ಬಗ್ಗೆ ಕೇಳಿದಂದಿನಿಂದ ನಾನು ನಿಮ್ಮ ವಿಷಯದಲ್ಲಿ
ದೇವರಿಗೆ ಸ್ತೋತ್ರ ಸಲ್ಲಿಸುತ್ತೇನೆ. 17ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ದೇವರೂ ಮಹಿಮಾ ಸ್ವರೂಪನಾದ ತಂದೆಯೂ
ಆಗಿರುವಾತನಿಗೆ ನಾನು ಯಾವಾಗಲೂ ಪ್ರಾರ್ಥಿಸುತ್ತೇನೆ.
ದೇವರ ಜ್ಞಾನದಿಂದ ಅಂದರೆ ಆತನು ನಿಮಗೆ ತಿಳಿಯಪಡಿಸಿದ
ಜ್ಞಾನದಿಂದ ನಿಮ್ಮನ್ನು ವಿವೇಕಿಗಳನ್ನಾಗಿ ಮಾಡುವಂಥ ಆತ್ಮ
ವನ್ನು ಆತನು ನಿಮಗೆ ಅನುಗ್ರಹಿಸಲೆಂದು ನಾನು ಪ್ರಾರ್ಥಿಸು
ತ್ತೇನೆ. 18ನೀವು ನಿಮ್ಮ ಹೃದಯದಲ್ಲಿ ಇನ್ನೂ ಹೆಚ್ಚಿನ ತಿಳುವಳಿಕೆ
ಯನ್ನು ಹೊಂದಿಕೊಳ್ಳಲೆಂದು ಪ್ರಾರ್ಥಿಸುತ್ತೇನೆ. ನಾವು ಎಂಥ
ನಿರೀಕ್ಷೆಯನ್ನು ಹೊಂದಿಕೊಳ್ಳಬೇಕೆಂದು ದೇವರು ನಮ್ಮನ್ನು
ಆರಿಸಿಕೊಂಡನೆಂಬುದನ್ನು ಆಗ ತಿಳಿದುಕೊಳ್ಳುವಿರಿ; ಆತನು ತನ್ನ
ಪರಿಶುದ್ಧ ಜನರಿಗೆ ವಾಗ್ದಾನ ಮಾಡಿದ ಆಶೀರ್ವಾದಗಳು ಎಷ್ಟು
ಮಹಿಮಾತಿಶಯವಾಗಿವೆ ಎಂಬುದನ್ನು ತಿಳಿದುಕೊಳ್ಳುವಿರಿ.
19ನಂಬಿಕೆಯಿಡುವಂಥ ನಮಗೆ ದೇವರ ಶಕ್ತಿಯು ಎಷ್ಟು ಮಹತ್ವ
ಉಳ್ಳದ್ದಾಗಿದೆ ಎಂಬುದನ್ನೂ ಆಗ ನೀವು ತಿಳಿದುಕೊಳ್ಳುವಿರಿ.
ಕ್ರಿಸ್ತನನ್ನು ಮರಣದಿಂದ ಜೀವಂತವಾಗಿ ಎಬ್ಬಿಸಲು ದೇವರು
ಉಪಯೋಗಿಸಿದ ಮಹಾಶಕ್ತಿ ಅದೇ. 20ದೇವರು ಕ್ರಿಸ್ತನನ್ನು

**ಎಫೆಸ** ಕೆಲವು ಪ್ರಾಚೀನ ಪತ್ರಿಕೆಗಳಲ್ಲಿ ಈ ಪದವು ಇಲ್ಲ.

ಪರಲೋಕದೊಳಗೆ ತನ್ನ ಬಲಗಡೆಯಲ್ಲಿ ಕುಳ್ಳಿರಿಸಿಕೊಂಡನು.
21ದೇವರು ಕ್ರಿಸ್ತನನ್ನು ಎಲ್ಲಾ ಆಧಿಪತಿಗಳಿಗಿಂತಲೂ ಅಧಿಕಾರಿ
ಗಳಿಗಿಂತಲೂ ಶಕ್ತಿಗಳಿಗಿಂತಲೂ ರಾಜರುಗಳಿಗಿಂತಲೂ
ಪ್ರಮುಖನನ್ನಾಗಿ ಮಾಡಿದನು. ಈ ಲೋಕದಲ್ಲಾಗಲಿ
ಮುಂದಿನ ಲೋಕದಲ್ಲಾಗಲಿ ಕೊಡಲ್ಪಟ್ಟಿರುವ ಯಾವುದೇ
ಹೆಸರುಳ್ಳವರಿಗಿಂತಲೂ ಕ್ರಿಸ್ತನು ಪ್ರಮುಖನಾಗಿದ್ದಾನೆ.
22ದೇವರು ಪ್ರತಿಯೊಂದನ್ನು ಕ್ರಿಸ್ತನ ಅಧಿಕಾರಕ್ಕೆ ಒಳ
ಪಡಿಸಿದನು. ಸಭೆಗೋಸ್ಕರವಾಗಿ ದೇವರು ಆತನನ್ನು ಪ್ರತಿ
ಯೊಂದರ ಮೇಲೆ ಶಿರಸ್ಸನ್ನಾಗಿ ಮಾಡಿದನು. 23ಸಭೆಯು ಕ್ರಿಸ್ತನ
ದೇಹವಾಗಿದೆ. ಸಭೆಯು ಕ್ರಿಸ್ತನಿಂದ ಆವರಿಸಲ್ಪಟ್ಟಿದೆ. ಆತನು
ಸಮಸ್ತವನ್ನು ಪ್ರತಿಯೊಂದು ವಿಷಯದಲ್ಲಿಯೂ ಸಂಪೂರ್ಣ
ಗೊಳಿಸುತ್ತಾನೆ.

## ಮರಣದಿಂದ ಜೀವಕ್ಕೆ

2 ಮೊದಲು ನಿಮ್ಮ ಆತ್ಮಿಕ ಜೀವಿತಗಳು, ನಿಮ್ಮ ಪಾಪಗಳು
ಮತ್ತು ನೀವು ದೇವರಿಗೆ ವಿರುದ್ಧವಾಗಿ ಮಾಡಿದ
ಕೆಟ್ಟಕಾರ್ಯಗಳ ದೆಸೆಯಿಂದ ಸತ್ತುಹೋಗಿದ್ದವು. 2ಹೌದು,
ಮೊದಲು ನೀವು ಆ ಪಾಪಗಳನ್ನೇ ಮಾಡುತ್ತಿದ್ದಿರಿ. ಈ ಲೋಕದ
ಮಾರ್ಗಗಳಿಗನುಸಾರವಾಗಿ ನೀವು ಜೀವಿಸಿದಿರಿ. ವಾಯು
ಮಂಡಲದಲ್ಲಿರುವ ದುಷ್ಟ ಶಕ್ತಿಗಳ ಅಧಿಪತಿಯನ್ನು ನೀವು
ಅನುಸರಿಸಿದಿರಿ. ದೇವರಿಗೆ ಅವಿಧೇಯರಾದ ಜನರಲ್ಲಿ ಈಗ
ಕಾರ್ಯಮಾಡುತ್ತಿರುವುದು ಅದೇ ಆತ್ಮ. 3ಮೊದಲು
ನಾವೆಲ್ಲರೂ ಆ ಜನರಂತೆಯೇ ಜೀವಿಸುತ್ತಿದ್ದೆವು. ಶರೀರ
ಭಾವದ ನಮ್ಮ ಇಚ್ಛೆಗಳನ್ನು ಪೂರೈಸಲು ನಾವು ಪ್ರಯತ್ನಿ
ಸುತ್ತಿದ್ದೆವು. ನಮ್ಮ ದೇಹ ಮನಸ್ಸುಗಳು ಬಯಸಿದ್ದನ್ನೆಲ್ಲಾ ನಾವು
ಮಾಡಿದೆವು. ನಾವು ದುಷ್ಟಜನರಾಗಿದ್ದೆವು. ನಮ್ಮ ಆ ಜೀವಿತದ
ದೆಸೆಯಿಂದ ನಾವು ಆಗಲೇ ದೇವರ ಕೋಪಕ್ಕೆ ಗುರಿಯಾಗ
ಬೇಕಿತ್ತು. ನಮಗೂ ಇತರ ಜನರಿಗೂ ಯಾವ ವ್ಯತ್ಯಾಸವೂ
ಇರಲಿಲ್ಲ.

4ಆದರೆ ಕರುಣಾನಿಧಿಯಾಗಿರುವ ದೇವರು ನಮ್ಮನ್ನು
ಬಹಳವಾಗಿ ಪ್ರೀತಿಸಿದನು. 5ನಾವು ದೇವರಿಗೆ ವಿರುದ್ಧವಾಗಿ
ಮಾಡಿದ ಕಾರ್ಯಗಳ ದೆಸೆಯಿಂದ ಸತ್ತವರಾಗಿದ್ದೆವು. ಆದರೆ
ನಮ್ಮನ್ನು ಕ್ರಿಸ್ತನೊಂದಿಗೆ ಬದುಕಿಸಿದನು. ನೀವು ದೇವರ ಕೃಪೆ
ಯಿಂದ ರಕ್ಷಣೆ ಹೊಂದಿದವರಾಗಿದ್ದೀರಿ. 6ದೇವರು ನಮ್ಮನ್ನು
ಕ್ರಿಸ್ತನೊಂದಿಗೆ ಎಬ್ಬಿಸಿ ಆತನೊಂದಿಗೆ ಪರಲೋಕದಲ್ಲಿ
ಸಿಂಹಾಸನದ ಮೇಲೆ ಕುಳ್ಳಿರಿಸಿದ್ದಾನೆ. ಕ್ರಿಸ್ತ ಯೇಸುವಿನಲ್ಲಿರುವ
ನಮಗಾಗಿ ದೇವರು ಇದನ್ನು ಮಾಡಿದನು. 7ದೇವರು ತನ್ನ
ಮಹಾತಿಶಯವಾದ ಕೃಪೆಯನ್ನು ಮುಂದಿನ ಕಾಲದಲ್ಲೆಲ್ಲಾ
ತೋರಿಸಬೇಕೆಂದು ಹೀಗೆ ಮಾಡಿದ್ದಾನೆ. ದೇವರು ಈ
ಕೃಪೆಯನ್ನು ತನ್ನ ಕರುಣೆಯ ಮೂಲಕ ನಮಗೆ ಕ್ರಿಸ್ತಯೇಸುವಿ
ನಲ್ಲಿ ತೋರಿಸುತ್ತಾನೆ. 8ಆದ್ದರಿಂದ ನೀವು ನಂಬಿಕೆಯ ಮೂಲಕ
ದೇವರ ಕೃಪೆಯಿಂದಲೇ ರಕ್ಷಣೆ ಹೊಂದಿದವರಾಗಿದ್ದೀರಿ. ಆ
ರಕ್ಷಣೆಯು ನಿಮ್ಮಿಂದ ಉಂಟಾದದ್ದಲ್ಲ, ಅದು ದೇವರ ವರ.
9ನಿಮಗೆ ರಕ್ಷಣೆ ದೊರೆತದ್ದು ನಿಮ್ಮ ಒಳ್ಳೆಯ ಕಾರ್ಯಗಳಿಂದಲ್ಲ.
ಆದ್ದರಿಂದ ತನ್ನನ್ನು ತಾನೇ ರಕ್ಷಿಸಿಕೊಂಡಿರುವುದಾಗಿ ಯಾರೂ
ಹೊಗಳಿಕೊಳ್ಳಲು ಸಾಧ್ಯವಿಲ್ಲ. 10ನಾವು ದೇವರ ನಿರ್ಮಾಣ.
ನಾವು ಒಳ್ಳೆಯ ಕಾರ್ಯಗಳನ್ನು ಮಾಡಬೇಕೆಂದು ದೇವರು
ನಮ್ಮನ್ನು ಕ್ರಿಸ್ತಯೇಸುವಿನಲ್ಲಿ ಹೊಸ ಜನರನ್ನಾಗಿ ಮಾಡಿದನು.
ದೇವರು ನಮಗೋಸ್ಕರವಾಗಿ ಆ ಒಳ್ಳೆಯ ಕಾರ್ಯಗಳನ್ನು
ಮೊದಲೇ ಯೋಜನೆ ಮಾಡಿದನು. ನಾವು ಆ ಒಳ್ಳೆಯ
ಕಾರ್ಯಗಳನ್ನು ಮಾಡುತ್ತಾ ಜೀವಿಸಬೇಕೆಂಬುದು ದೇವರ
ಯೋಜನೆಯಾಗಿತ್ತು.

## ಕ್ರಿಸ್ತನ ಮೂಲಕ ಸಮಾನತ್ವ

11ನೀವು ಹುಟ್ಟಿದಂದಿನಿಂದ ಅನ್ಯಜನರಾಗಿದ್ದೀರಿ. ನಿಮ್ಮನ್ನು
‘‘ಸುನ್ನತಿಯಿಲ್ಲದವರು’’ ಎಂದು ಯೆಹೂದ್ಯರು ಕರೆಯುತ್ತಾರೆ.
ನಿಮ್ಮನ್ನು‘‘ ಸುನ್ನತಿಯಿಲ್ಲದವರು’’ ಎಂದು ಕರೆಯುವ
ಯೆಹೂದ್ಯರು ತಮ್ಮ ಬಗ್ಗೆ ‘‘ಸುನ್ನತಿಯವರು’’ ಎಂದು ಹೇಳಿ
ಕೊಳ್ಳುತ್ತಾರೆ. (ಅವರ ಸುನ್ನತಿಯು ಶರೀರದಲ್ಲಿ ಕೈಯಿಂದ
ಮಾಡಲ್ಪಡುತ್ತದೆ.) 12ಪೂರ್ವಕಾಲದಲ್ಲಿ ನೀವು ಕ್ರಿಸ್ತನಿಲ್ಲ
ದವರಾಗಿದ್ದಿರಿ ಎಂಬುದನ್ನು ಜ್ಞಾಪಿಸಿಕೊಳ್ಳಿರಿ. ನೀವು ಇಸ್ರೇಲಿನ
ಪ್ರಜೆಗಳಾಗಿರಲಿಲ್ಲ. ದೇವರು ತನ್ನ ಜನರೊಂದಿಗೆ ಮಾಡಿ
ಕೊಂಡಿದ್ದ ವಾಗ್ದಾನಗಳಿಗೆ ಸಂಬಂಧಪಟ್ಟ ಒಡಂಬಡಿಕೆಗಳನ್ನು
ನೀವು ಹೊಂದಿರಲಿಲ್ಲ. ನಿಮಗೆ ನಿರೀಕ್ಷೆಯಿರಲಿಲ್ಲ ಮತ್ತು ನೀವು
ದೇವರನ್ನು ತಿಳಿದಿರಲಿಲ್ಲ. 13ಹೌದು, ಒಂದುಕಾಲದಲ್ಲಿ ನೀವು
ದೇವರಿಗೆ ಬಹು ದೂರವಾಗಿದ್ದಿರಿ. ಆದರೆ ಈಗ ನೀವು ಕ್ರಿಸ್ತ
ಯೇಸುವಿನ ರಕ್ತದ ಮೂಲಕ ದೇವರಿಗೆ ಸಮೀಪಸ್ಥರಾದಿರಿ.
14ಕ್ರಿಸ್ತನಿಂದ ಈಗ ನಮಗೆ ಸಮಾಧಾನ ದೊರೆತಿದೆ. ಕ್ರಿಸ್ತನು
ಯೆಹೂದ್ಯರನ್ನೂ ಯೆಹೂದ್ಯರಲ್ಲದವರನ್ನೂ ಒಂದೇ ಜನಾಂಗ
ವನ್ನಾಗಿ ಮಾಡಿದ್ದಾನೆ. ಯೆಹೂದ್ಯರೂ ಯೆಹೂದ್ಯರಲ್ಲದವರೂ
ತಮ್ಮ ಮಧ್ಯೆ ಒಂದು ಅಡ್ಡಗೋಡೆಯಿದೆಯೋ ಎಂಬಂತೆ
ಬೇರ್ಪಟ್ಟಿದ್ದರು. ಅವರು ಒಬ್ಬರನ್ನೊಬ್ಬರು ದ್ವೇಷಿಸಿದರು.
ಆದರೆ ಕ್ರಿಸ್ತನು ತನ್ನ ದೇಹವನ್ನೇ ಅರ್ಪಿಸುವುದರ ಮೂಲಕ
ದ್ವೇಷವೆಂಬ ಆ ಗೋಡೆಯನ್ನು ಕೆಡವಿದನು. 15ಯೆಹೂದ್ಯರ
ಧರ್ಮಶಾಸ್ತ್ರವು ಅನೇಕ ಆಜ್ಞೆಗಳನ್ನೂ ನಿಯಮಗಳನ್ನೂ
ಹೊಂದಿತ್ತು. ಆದರೆ ಕ್ರಿಸ್ತನು ಆ ಧರ್ಮಶಾಸ್ತ್ರವನ್ನು ಅಂತಿಮ
ಗೊಳಿಸಿದನು. ಯೆಹೂದ್ಯರನ್ನು ಮತ್ತು ಯೆಹೂದ್ಯರಲ್ಲದವ
ರನ್ನು ತನ್ನಲ್ಲಿ ಒಂದು ಜನಾಂಗವನ್ನಾಗಿ ಮಾಡಿ ಶಾಂತಿಯನ್ನು
ಸ್ಥಾಪಿಸಬೇಕೆಂಬುದೇ ಕ್ರಿಸ್ತನ ಉದ್ದೇಶವಾಗಿತ್ತು. 16ಈ ಎರಡು
ಜನಾಂಗಗಳ ನಡುವೆ ಇದ್ದ ದ್ವೇಷವನ್ನು ಕ್ರಿಸ್ತನು ಶಿಲುಬೆಯ
ಮೂಲಕ ಕೊನೆಗೊಳಿಸಿದನು. ಈ ಜನಾಂಗಗಳು ಒಂದೇ
ದೇಹವಾದ ಬಳಿಕ ಅವರನ್ನು ದೇವರ ಬಳಿಗೆ ನಡೆಸ
ಬೇಕೆಂಬುದು ಕ್ರಿಸ್ತನ ಬಯಕೆಯಾಗಿತ್ತು. ಶಿಲುಬೆಯ ಮೇಲೆ
ಪ್ರಾಣಕೊಡುವುದರ ಮೂಲಕ ಕ್ರಿಸ್ತನು ತನ್ನ ಈ ಬಯಕೆಯನ್ನು
ಪೂರೈಸಿದನು. 17ದೇವರಿಗೆ ದೂರವಾಗಿದ್ದ ನಿಮ್ಮ ಬಳಿಗೂ
ಸಮೀಪಸ್ಥರಾಗಿದ್ದವರ ಬಳಿಗೂ ಕ್ರಿಸ್ತನು ಬಂದು ಸಮಾಧಾನದ
ಕುರಿತು ಉಪದೇಶಿಸಿದನು. 18ಹೌದು, ಕ್ರಿಸ್ತನ ಮೂಲಕ
ನಾವೆಲ್ಲರೂ ಒಬ್ಬ ಆತ್ಮನಿಂದ ನಮ್ಮ ತಂದೆಯಾದ ದೇವರ ಬಳಿಗೆ
ಬರಲು ಶಕ್ತರಾಗಿದ್ದೇವೆ.

19ಆದ್ದರಿಂದ ಯೆಹೂದ್ಯರಲ್ಲದವರಾದ ನೀವು ಈಗ
ವಿದೇಶಿಯರಲ್ಲ ಮತ್ತು ಅನ್ಯಜನರಲ್ಲ. ಈಗ ನೀವು ದೇವರ
ಪರಿಶುದ್ಧ ಜನರೊಂದಿಗೆ ಪ್ರಜೆಗಳಾಗಿದ್ದೀರಿ. ನೀವು ದೇವರ
ಕುಟುಂಬಕ್ಕೆ ಸೇರಿದವರಾಗಿದ್ದೀರಿ. 20ವಿಶ್ವಾಸಿಗಳಾದ ನೀವು
ದೇವರ ಸ್ವಂತ ಕಟ್ಟಡವಾಗಿದ್ದೀರಿ. ಅಪೊಸ್ತಲರೂ ಪ್ರವಾದಿ

ಗಳೂ ಎಂಬ ಅಸ್ತಿವಾರದ ಮೇಲೆ ಆ ಕಟ್ಟಡವು ಕಟ್ಟಲ್ಪಟ್ಟಿದೆ.
ಕ್ರಿಸ್ತನೇ ಆ ಕಟ್ಟಡಕ್ಕೆ ಮೂಲೆಗಲ್ಲಾಗಿದ್ದಾನೆ. 21ಇಡೀ ಕಟ್ಟಡವು
ಕ್ರಿಸ್ತನಲ್ಲಿ ಒಂದಾಗಿ ಸೇರಿಕೊಂಡಿದೆ. ಕ್ರಿಸ್ತನೇ ಅದನ್ನು ಬೆಳೆಯಿಸಿ
ಪ್ರಭುವಿನಲ್ಲಿ ಪರಿಶುದ್ಧವಾದ ದೇವಾಲಯವನ್ನಾಗಿ ಮಾಡು
ತ್ತಾನೆ.
22ನೀವು ಕ್ರಿಸ್ತನಲ್ಲಿ ಇತರ ಜನರೊಂದಿಗೆ (ಯೆಹೂದ್ಯ
ರೊಂದಿಗೆ) ಕಟ್ಟಲ್ಪಡುತ್ತಿದ್ದೀರಿ. ದೇವರು ತನ್ನ ಆತ್ಮನ ಮೂಲಕ
ವಾಸಿಸತಕ್ಕ ನಿವಾಸಸ್ಥಾನವಾಗಿ ನಿರ್ಮಿತರಾಗುತ್ತಿದ್ದೀರಿ.

## ಅನ್ಯಜನರಿಗಾಗಿ ಪೌಲನ ಸೇವೆ

3 ನಾನು ಕ್ರಿಸ್ತಯೇಸುವಿನ ಸೆರೆಯಾಳು. ಯೆಹೂದ್ಯರಲ್ಲದ
ನಿಮಗೋಸ್ಕರ ನಾನು ಸೆರೆಯಾಳಾಗಿದ್ದೇನೆ. 2ದೇವರು
ತನ್ನ ಕೃಪೆಯ ಮೂಲಕ ನನಗೆ ಈ ಕೆಲಸವನ್ನು ಕೊಟ್ಟನೆಂಬುದು
ನಿಮಗೆ ಖಂಡಿತವಾಗಿ ತಿಳಿದಿದೆ. ನಿಮಗೆ ಸಹಾಯ
ಮಾಡುವುದಕ್ಕಾಗಿ ದೇವರು ಈ ಕೆಲಸವನ್ನು ನನಗೆ ಕೊಟ್ಟನು.
3ದೇವರು ತನ್ನ ರಹಸ್ಯವಾದ ಯೋಜನೆಯನ್ನು ನನಗೆ ತಿಳಿಸಿದನು
ಮತ್ತು ತೋರಿಸಿದನು. ಇದರ ಬಗ್ಗೆ ನಾನು ಆಗಲೇ ನಿಮಗೆ ಸ್ವಲ್ಪ
ಬರೆದಿದ್ದೇನೆ. 4ನಾನು ಬರೆದಿರುವ ಈ ಸಂಗತಿಗಳನ್ನು ನೀವು
ಓದಿದರೆ ಕ್ರಿಸ್ತನ ರಹಸ್ಯವಾದ ಸತ್ಯವನ್ನು ನಾನು ನಿಜವಾಗಿಯೂ
ಅರ್ಥಮಾಡಿಕೊಂಡಿದ್ದೇನೆ ಎಂಬುದು ನಿಮಗೇ ತಿಳಿಯುತ್ತದೆ.
5ಹಿಂದಿನ ಕಾಲಗಳಲ್ಲಿದ್ದ ಜನರಿಗೆ ಆ ಗುಪ್ತಸತ್ಯವನ್ನು ಆತನು
ತಿಳಿಸಲಿಲ್ಲ. ಈಗಲಾದರೊ ದೇವರು ತನ್ನ ಆತ್ಮನ ಮೂಲಕವಾಗಿ
ಆ ಗುಪ್ತ ಸತ್ಯವನ್ನು ತನ್ನ ಪರಿಶುದ್ಧ ಅಪೊಸ್ತಲರಿಗೂ ಪ್ರವಾದಿ
ಗಳಿಗೂ ತೋರಿಸಿದ್ದಾನೆ. 6ಆ ಗುಪ್ತ ಸತ್ಯವಿದು: ಯೆಹೂದ್ಯ
ರಲ್ಲದವರು ಸುವಾರ್ತೆಯ ಮೂಲಕ ಕ್ರಿಸ್ತಯೇಸುವಿನಲ್ಲಿ
ಇರುವವರಾಗಿ ಯೆಹೂದ್ಯರೊಂದಿಗೆ ಬಾಧ್ಯರೂ ಒಂದೇ
ದೇಹಕ್ಕೆ ಸೇರಿದವರೂ ಅಬ್ರಹಾಮನಿಗುಂಟಾದ ವಾಗ್ದಾನದಲ್ಲಿ
ಪಾಲುಗಾರರೂ ಆಗಿದ್ದಾರೆ.
7ದೇವರು ನೀಡಿದ ವಿಶೇಷವಾದ ಕೃಪಾವರದಿಂದ ನಾನು
ಸುವಾರ್ತೆಯನ್ನು ತಿಳಿಸಲು ಸೇವಕನಾದೆನು. ದೇವರು ತನ್ನ
ಶಕ್ತಿಯನ್ನು ಪ್ರಯೋಗಿಸಿ ನನಗೆ ಆ ಕೃಪಾವರವನ್ನು ಕೊಟ್ಟನು.
8ದೇವಜನರಲ್ಲಿ ನಾನೇ ಅತ್ಯಲ್ಪನು. ಕ್ರಿಸ್ತನ ಐಶ್ವರ್ಯವನ್ನು
ಕುರಿತಾದ ಸುವಾರ್ತೆಯನ್ನು ನಾನು ಯೆಹೂದ್ಯರಲ್ಲದವರಿಗೆ
ತಿಳಿಸಬೇಕೆಂದು ದೇವರು ನನಗೆ ಈ ಕೃಪಾವರವನ್ನು ಕೊಟ್ಟನು.
ಆ ಐಶ್ವರ್ಯವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳಲು
ಸಾಧ್ಯವಿಲ್ಲ. 9ಗುಪ್ತವಾಗಿದ್ದ ತನ್ನ ಯೋಜನೆಯನ್ನು ಜನರೆಲ್ಲರಿಗೆ
ತಿಳಿಸಬೇಕೆಂಬ ಕೆಲಸವನ್ನು ದೇವರು ನನಗೆ ಕೊಟ್ಟನು. ಆದಿ
ಯಿಂದಲೂ ಅದು ದೇವರಲ್ಲಿ ಮರೆಯಾಗಿತ್ತು. ಪ್ರತಿ
ಯೊಂದನ್ನೂ ಸೃಷ್ಟಿಸಿದಾತನು ದೇವರೇ. 10ತನ್ನ ನಾನಾ ವಿಧ
ವಾದ ಜ್ಞಾನವು ಆಕಾಶಮಂಡಲದಲ್ಲಿರುವ ಎಲ್ಲಾ ಅಧಿಪತಿ
ಗಳಿಗೂ ಅಧಿಕಾರಿಗಳಿಗೂ ಈಗ ಸಭೆಯ ಮೂಲಕ ಗೊತ್ತಾಗ
ಬೇಕೆಂಬುದೇ ದೇವರ ಉದ್ದೇಶವಾಗಿತ್ತು. 11ಅನಾದಿಕಾಲ
ದಿಂದಲೂ ಇದೇ ದೇವರ ಯೋಜನೆಯಾಗಿತ್ತು. ದೇವರು ನಮ್ಮ
ಪ್ರಭುವಾದ ಯೇಸು ಕ್ರಿಸ್ತನ ಮೂಲಕ ತನ್ನ ಯೋಜನೆಗನು
ಸಾರವಾಗಿ ಮಾಡಿದನು. 12ನಾವು ಕ್ರಿಸ್ತನಲ್ಲಿರುವ ನಂಬಿಕೆಯ
ಮೂಲಕ ದೇವರ ಬಳಿಗೆ ಸ್ವತಂತ್ರದಿಂದ ಮತ್ತು ನಿರ್ಭಯದಿಂದ
ಹೋಗಲು ಸಾಧ್ಯವಾಯಿತು. 13ಹೀಗಿರಲಾಗಿ ನಾನು ನಿಮ
ಗೋಸ್ಕರ ಅನುಭವಿಸುತ್ತಿರುವ ಕಷ್ಟಗಳನ್ನು ನೋಡಿ ನಿರಾಶ
ರಾಗಿ ಧೈರ್ಯಗೆಡಬೇಡಿ. ನನ್ನ ಕಷ್ಟಗಳು ನಿಮಗೆ ಘನತೆಯನ್ನು
ಉಂಟುಮಾಡುತ್ತವೆ.

## ಕ್ರಿಸ್ತನ ಪ್ರೀತಿ

14ಆದ್ದರಿಂದ ತಂದೆಯ ಮುಂದೆ ಮೊಣಕಾಲೂರಿ
ಪ್ರಾರ್ಥಿಸುತ್ತೇನೆ. 15ಭೂಪರಲೋಕಗಳಲ್ಲಿರುವ ಪ್ರತಿ
ಯೊಂದು ಕುಟುಂಬವು ಆತನಿಂದ ತನ್ನ ನಿಜ ಹೆಸರನ್ನು
ಪಡೆದುಕೊಳ್ಳುತ್ತದೆ. 16ನೀವು ನಿಮ್ಮ ಆತ್ಮಗಳಲ್ಲಿ ಬಲವಾಗಿರಲು
ಅಗತ್ಯವಾದ ಶಕ್ತಿಯನ್ನು ತನ್ನ ಮಹಿಮಾತಿಶಯದ ಪ್ರಕಾರ
ಕೊಡಬೇಕೆಂದು ತಂದೆಯನ್ನು ಕೇಳಿಕೊಳ್ಳುತ್ತೇನೆ. ಆತನು ತನ್ನ
ಆತ್ಮನ ಮೂಲಕವಾಗಿ ನಿಮಗೆ ಆ ಶಕ್ತಿಯನ್ನು ಕೊಡುತ್ತಾನೆ.
17ನಿಮ್ಮ ನಂಬಿಕೆಯ ಮೂಲಕ ಕ್ರಿಸ್ತನು ನಿಮ್ಮ ಹೃದಯಗಳಲ್ಲಿ
ವಾಸಿಸಬೇಕೆಂದು ಪ್ರಾರ್ಥಿಸುತ್ತೇನೆ. ನಿಮ್ಮ ಜೀವಿತವು ಪ್ರೀತಿ
ಯಲ್ಲಿ ಬಲವಾಗಿ ಬೇರೂರಿರಬೇಕೆಂದು ಮತ್ತು ಪ್ರೀತಿಯ
ಮೇಲೆ ಕಟ್ಟಲ್ಪಟ್ಟಿರಬೇಕೆಂದು ಪ್ರಾರ್ಥಿಸುತ್ತೇನೆ. 18ನೀವು
ಮತ್ತು ದೇವರ ಪರಿಶುದ್ಧ ಜನರೆಲ್ಲರೂ ಕ್ರಿಸ್ತನ ಪ್ರೀತಿಯ
ಮಹತ್ವವನ್ನು ಅರ್ಥಮಾಡಿಕೊಳ್ಳಲು ಬೇಕಾದ ಶಕ್ತಿಯನ್ನು
ಹೊಂದಿದವರಾಗಿರಬೇಕೆಂದು ಪ್ರಾರ್ಥಿಸುತ್ತೇನೆ. ಕ್ರಿಸ್ತನ
ಪ್ರೀತಿಯ ಉದ್ದಗಲಗಳನ್ನು ಮತ್ತು ಆಳ ಎತ್ತರಗಳನ್ನು ನೀವು
ಅರ್ಥಮಾಡಿಕೊಳ್ಳಲೆಂದು ಪ್ರಾರ್ಥಿಸುತ್ತೇನೆ. 19ಕ್ರಿಸ್ತನ ಪ್ರೀತಿ
ಯನ್ನು ಮನುಷ್ಯನು ಗ್ರಹಿಸಿಕೊಳ್ಳಲು ಸಾಧ್ಯವಿಲ್ಲ. ಆದರೆ ಆ
ಪ್ರೀತಿಯನ್ನು ನೀವು ತಿಳಿದುಕೊಳ್ಳಶಕ್ತರಾಗಲೆಂದು ಪ್ರಾರ್ಥಿಸು
ತ್ತೇನೆ. ಆಗ ನೀವು ದೇವರ ಸಂಪೂರ್ಣತೆಯಿಂದ ತುಂಬಿದವ
ರಾಗಲು ಸಾಧ್ಯವಾಗುತ್ತದೆ.
20ನಮ್ಮಲ್ಲಿ ಕಾರ್ಯಮಾಡುತ್ತಿರುವ ತನ್ನ ಶಕ್ತಿಯಿಂದ ನಾವು
ಕೇಳುವುದಕ್ಕಿಂತಲೂ ಯೋಚಿಸುವುದಕ್ಕಿಂತಲೂ ಎಷ್ಟೋ ಹೆಚ್ಚೆ
ಚ್ಚಾಗಿ ದೇವರು ಮಾಡಬಲ್ಲನು. 21ಆತನಿಗೆ ಸಭೆಯಲ್ಲಿಯೂ
ಕ್ರಿಸ್ತ ಯೇಸುವಿನಲ್ಲಿಯೂ ಯಾವಾಗಲೂ ಎಂದೆಂದಿಗೂ
ಸ್ತೋತ್ರವಾಗಲಿ. ಆಮೆನ್.

## ದೇಹದ ಐಕ್ಯತೆ

4 ನಾನು ಪ್ರಭುವಿಗೆ ಸೇರಿದವನಾದ್ದರಿಂದ ಸೆರೆಯಲ್ಲಿದ್ದೇನೆ.
ನೀವು ದೇವರಿಂದ ಕರೆಯಲ್ಪಟ್ಟಿದ್ದೀರಿ. ಆದ್ದರಿಂದ ನಿಮ್ಮ
ಕರೆಯುವಿಕೆಗೆ ತಕ್ಕಂತೆ ಯೋಗ್ಯವಾಗಿ ಜೀವಿಸಬೇಕೆಂದು
ನಿಮ್ಮನ್ನು ಬೇಡಿಕೊಳ್ಳುತ್ತೇನೆ. 2ಯಾವಾಗಲೂ ದೀನತೆಯಿಂದ,
ಸಾತ್ವಿಕತೆಯಿಂದ ಮತ್ತು ತಾಳ್ಮೆಯಿಂದ ಕೂಡಿದವರಾಗಿದ್ದು
ಒಬ್ಬರನ್ನೊಬ್ಬರು ಪ್ರೀತಿಯಿಂದ ಸಹಿಸಿಕೊಳ್ಳಿರಿ. 3ನೀವು ಆತ್ಮನ
ಮೂಲಕವಾಗಿ ಸಮಾಧಾನವೆಂಬ ಬಂಧನದಿಂದ ಒಂದಾಗಿ
ದ್ದೀರಿ. ಈ ರೀತಿ ಜೀವಿಸಲು ನಿಮ್ಮಿಂದ ಸಾಧ್ಯವಾದಷ್ಟು ಪ್ರಯ
ತ್ನಿಸಿ. ಸಮಾಧಾನವು ನಿಮ್ಮೆಲ್ಲರನ್ನು ಒಂದಾಗಿಸಲಿ. 4ದೇಹವು
ಒಂದೇ. ಆತ್ಮನು ಒಬ್ಬನೇ. ನೀವೆಲ್ಲರೂ ಒಂದೇ ನಿರೀಕ್ಷೆಯನ್ನು
ಹೊಂದಿರಬೇಕೆಂದು ದೇವರು ನಿಮ್ಮನ್ನು ಕರೆದನು. 5ಒಬ್ಬನೇ
ಪ್ರಭು. ಒಂದೇ ನಂಬಿಕೆ. ಒಂದೇ ದೀಕ್ಷಾಸ್ನಾನ. 6ಎಲ್ಲರಿಗೂ
ತಂದೆಯಾಗಿರುವ ದೇವರು ಒಬ್ಬನೇ. ಆತನು ಸಮಸ್ತವನ್ನೂ
ಆಳುತ್ತಾನೆ. ಆತನು ಸರ್ವವ್ಯಾಪಿಯಾಗಿದ್ದಾನೆ ಮತ್ತು ಎಲ್ಲರಲ್ಲಿ
ವಾಸಿಸುವವನಾಗಿದ್ದಾನೆ. 7ಕ್ರಿಸ್ತನು ನಮ್ಮಲ್ಲಿ ಪ್ರತಿಯೊಬ್ಬರಿಗೂ

ವಿಶೇಷವಾದ ವರವನ್ನು ಕೊಟ್ಟಿದ್ದಾನೆ. ಪ್ರತಿಯೊಬ್ಬನು ಕ್ರಿಸ್ತನ
ಇಷ್ಟಾನುಸಾರವಾಗಿ ವರವನ್ನು ಪಡೆದುಕೊಂಡಿದ್ದಾನೆ. 8ಆದ
ಕಾರಣವೇ ಪವಿತ್ರ ಗ್ರಂಥದಲ್ಲಿ ಈ ರೀತಿ ಬರೆದಿದೆ:

‘‘ಆತನು ಆಕಾಶದ ಉನ್ನತಸ್ಥಾನಕ್ಕೆ ಏರಿಹೋದಾಗ,
ಶತ್ರುಗಳನ್ನು ಸೆರೆಯಾಳುಗಳಾಗಿ ಕೊಂಡೊಯ್ದು
ಜನರಿಗೆ ದಾನಗಳನ್ನು ಮಾಡಿದನು.’’

*ಕೀರ್ತನೆ 68:18*

9‘‘ಆತನು ಉನ್ನತ ಸ್ಥಾನಕ್ಕೆ ಏರಿಹೋದನು’’ ಎಂದರೆ ಆತನು
ಭೂಲೋಕಕ್ಕೆ ಇಳಿದುಬಂದು, 10ಭೂಮಿಯ ಅಧೋಭಾಗಕ್ಕೆ
ಇಳಿದುಹೋಗಿ, ಅಲ್ಲಿಂದ ಆಕಾಶದ ಅತ್ಯುನ್ನತಸ್ಥಾನಕ್ಕೆ ಏರಿ
ಹೋದನು ಎಂದರ್ಥ. ಸಮಸ್ತದಲ್ಲಿ ತಾನೇ ತುಂಬಿರಬೇಕೆಂದು
ಕ್ರಿಸ್ತನು ಹಾಗೆ ಮಾಡಿದನು. 11ಆತನು ಕೆಲವರನ್ನು ಅಪೊಸ್ತಲರ
ನ್ನಾಗಿಯೂ ಕೆಲವರನ್ನು ಪ್ರವಾದಿಗಳನ್ನಾಗಿಯೂ ಕೆಲವರನ್ನು
ಸುವಾರ್ತಿಕರನ್ನಾಗಿಯೂ ಕೆಲವರನ್ನು ಸಭಾಪಾಲಕ
ರನ್ನಾಗಿಯೂ ಮತ್ತು ಉಪದೇಶಕರನ್ನಾಗಿಯೂ ನೇಮಿಸಿದನು.
12ಸಭೆಯ ಸೇವೆಗೋಸ್ಕರ ದೇವರ ಪರಿಶುದ್ಧ ಜನರನ್ನು
ಸಿದ್ಧಪಡಿಸುವುದಕ್ಕಾಗಿ ಆತನು ಅವರನ್ನು ನೇಮಿಸಿದನು.
13ನಾವೆಲ್ಲರೂ ಒಂದೇ ನಂಬಿಕೆಯಿಂದಲೂ ದೇವಕುಮಾರನ
ವಿಷಯವಾದ ಜ್ಞಾನದಿಂದಲೂ ಐಕ್ಯರಾಗುವ ತನಕ ಈ
ಸೇವೆಯು ಮುಂದುವರಿಯಬೇಕು. ನಾವು ಪರಿಪೂರ್ಣ
ರಾಗುವ ತನಕ ಅಂದರೆ ಕ್ರಿಸ್ತನ ಸರ್ವಸಂಪೂರ್ಣತೆಯನ್ನು
ಮುಟ್ಟುವ ತನಕ ಬೆಳೆಯಬೇಕು.

14ನಾವು ಇನ್ನು ಮೇಲೆ ಕೂಸುಗಳಾಗಿರಬಾರದು. ಸಮುದ್ರದ
ಅಲೆಗಳಿಂದ ಅತ್ತಿಂದಿತ್ತ ಚಲಿಸುವ ಹಡಗಿನಂತೆ ಚಂಚಲರಾಗಿರ
ಬಾರದು. ನಮ್ಮನ್ನು ವಂಚಿಸುವುದಕ್ಕಾಗಿ ಜನರು ಹೇಳುವ
ಯಾವುದೇ ಹೊಸ ಉಪದೇಶದಿಂದಾಗಲಿ ನಾವು ಚಂಚಲರಾಗ
ಬಾರದು. ಜನರನ್ನು ಮೋಸಗೊಳಿಸಿ ಕೆಟ್ಟದಾರಿಗೆ ನಡೆಸ
ಬೇಕೆಂಬ ಉದ್ದೇಶದಿಂದ ಆ ದುರ್ಬೋಧಕರು ನಾನಾಬಗೆಯ
ಕುತಂತ್ರವನ್ನು ಮಾಡುತ್ತಾರೆ. 15ನಾವಾದರೋ ಸತ್ಯವನ್ನು
ಪ್ರೀತಿಯಿಂದ ಹೇಳಬೇಕು; ಎಲ್ಲಾ ವಿಷಯಗಳಲ್ಲಿಯೂ ಬೆಳೆದು
ಕ್ರಿಸ್ತನಂತಾಗಲು ಪ್ರಯತ್ನಿಸಬೇಕು. ಕ್ರಿಸ್ತನು ಶಿರಸ್ಸಾಗಿದ್ದಾನೆ
ಮತ್ತು ನಾವು ದೇಹವಾಗಿದ್ದೇವೆ. 16ಇಡೀ ದೇಹವು ಕ್ರಿಸ್ತನನ್ನು
ಅವಲಂಬಿಸಿಕೊಂಡಿದೆ. ದೇಹದ ಒಂದೊಂದು ಅಂಗಗಳೂ
ಒಂದಕ್ಕೊಂದು ಬಿಗಿದುಕೊಂಡಿವೆ. ಪ್ರತಿಯೊಂದು ಅಂಗವು
ತನ್ನದೇ ಆದ ಕೆಲಸವನ್ನು ಮಾಡುವುದರಿಂದ ಇಡೀ ದೇಹವು
ಬೆಳೆದು ಪ್ರೀತಿಯಲ್ಲಿ ಬಲವಾಗಿರಲು ಸಾಧ್ಯವಾಗುತ್ತದೆ.

## ನೀವು ಜೀವಿಸಬೇಕಾದ ರೀತಿ

17 ಪ್ರಭುವಿಗೋಸ್ಕರ ನಾನು ನಿಮಗೆ ಇದನ್ನು ಹೇಳುತ್ತೇನೆ
ಮತ್ತು ಎಚ್ಚರಿಸುತ್ತೇನೆ. ಅವಿಶ್ವಾಸಿಗಳಂತೆ ಇನ್ನು ಮೇಲೆ
ಜೀವಿಸದಿರಿ. ಅವರ ಆಲೋಚನೆಗಳು ನಿಷ್ಪ್ರಯೋಜಕವಾಗಿವೆ.
18ಅವರು ಅರ್ಥಮಾಡಿಕೊಳ್ಳುವುದಿಲ್ಲ. ಅವರು ಕಿವಿಗೊಡದ
ಕಾರಣ ಅವರಿಗೆ ಏನೂಗೊತ್ತಿಲ್ಲ. ಆದ್ದರಿಂದ ದೇವರು ಕೊಡುವ
ಜೀವಿತವನ್ನು ಹೊಂದಿಕೊಳ್ಳಲು ಅವರಿಗೆ ಸಾಧ್ಯವಿಲ್ಲ. 19ಅವರಿಗೆ
ನಾಚಿಕೆಯೇ ಇಲ್ಲ. ಅವರು ತಮ್ಮ ಜೀವಿತಗಳನ್ನು ದುಷ್ಟಕಾರ್ಯ
ಗಳಿಗೆ ಉಪಯೋಗಿಸುತ್ತಾರೆ; ಎಲ್ಲಾ ಬಗೆಯ ಕೆಟ್ಟಕಾರ್ಯ
ಗಳನ್ನು ಇನ್ನೂ ಹೆಚ್ಚೆಚ್ಚಾಗಿ ಮಾಡಲು ತವಕಪಡುತ್ತಾರೆ. 20ಆದರೆ
ಕ್ರಿಸ್ತನಿಂದ ನೀವು ಕಲಿತುಕೊಂಡದ್ದು ಅವುಗಳನ್ನಲ್ಲ. 21ನೀವು
ಆತನ ವಿಷಯವಾಗಿ ಕೇಳಿದ್ದೀರೆಂಬುದು ನನಗೆ ಗೊತ್ತಿದೆ. ನೀವು
ಆತನಲ್ಲಿರುವುದರಿಂದ ಸತ್ಯವನ್ನು ಕಲಿತುಕೊಂಡಿರಿ. ಹೌದು,
ಸತ್ಯವು ಯೇಸುವಿನಲ್ಲಿದೆ. 22ನೀವು ನಿಮ್ಮ ಹಿಂದಿನ ಕೆಟ್ಟ
ನಡತೆಯನ್ನು ಅನುಸರಿಸದೆ ನಿಮ್ಮ ಹಳೆಯ ಸ್ವಭಾವವನ್ನು
ತೊರೆದುಬಿಡಬೇಕೆಂಬುದನ್ನು ಕಲಿತುಕೊಂಡಿರಿ. ಜನರು ತಾವು
ಮಾಡಬಯಸುವ ದುಷ್ಟಕಾರ್ಯಗಳಿಂದ ವಂಚಿತರಾಗಿರು
ವುದರಿಂದ ಆ ಹಳೆಯ ಸ್ವಭಾವವು ದಿನದಿಂದ ದಿನಕ್ಕೆ ಮತ್ತಷ್ಟು
ಕೆಟ್ಟುಹೋಗುತ್ತದೆ. 23ಆದರೆ ಆಂತರ್ಯದಲ್ಲಿ ಹೊಸಬರಾಗಿ
ನೂತನ ಸ್ವಭಾವವನ್ನು ಹೊಂದಿಕೊಳ್ಳತಕ್ಕ ರೀತಿಯನ್ನು ನೀವು
ಕಲಿತುಕೊಂಡಿರಿ. 24ಆ ಸ್ವಭಾವವು ದೇವರ ಹೋಲಿಕೆಯ
ಮೇರೆಗೆ ಸತ್ಯವಾದ ನೀತಿಯುಳ್ಳದ್ದಾಗಿಯೂ ಪರಿಶುದ್ಧ
ವಾಗಿಯೂ ನಿರ್ಮಿಸಲ್ಪಟ್ಟಿದೆ.

25ಆದ್ದರಿಂದ ನೀವು ಸುಳ್ಳು ಹೇಳದೆ ಒಬ್ಬರಿಗೊಬ್ಬರು
ಯಾವಾಗಲೂ ಸತ್ಯವನ್ನೇ ಹೇಳಿರಿ. ಏಕೆಂದರೆ ನಾವೆಲ್ಲರೂ
ಒಂದೇ ದೇಹಕ್ಕೆ ಸೇರಿದ ಅಂಗಗಳಾಗಿದ್ದೇವೆ. 26ಕೋಪ
ಗೊಂಡರೂ ಪಾಪ ಮಾಡಬೇಡಿ ಮತ್ತು ದಿನವೆಲ್ಲಾ ಕೋಪ
ದಿಂದಿರಬೇಡಿ.* 27ನಿಮ್ಮನ್ನು ಸೋಲಿಸಲು ಸೈತಾನನಿಗೆ
ಅವಕಾಶಕೊಡಬೇಡಿ. 28ಕಳ್ಳನು ಕದಿಯುವುದನ್ನು ನಿಲ್ಲಿಸಿ
ತಾನೇ ದುಡಿದು ಸಂಪಾದಿಸಲಿ; ಅವನು ತನ್ನ ಕೈಗಳನ್ನು ಒಳ್ಳೆಯ
ದನ್ನು ಮಾಡುವುದಕ್ಕಾಗಿ ಉಪಯೋಗಿಸಲಿ. ಆಗ ಬಡವರಿಗೂ
ಸಹಾಯ ಮಾಡಲು ಅವನಿಗೆ ಸಾಧ್ಯವಾಗುವುದು.

29ನಿಮ್ಮ ಬಾಯಿಂದ ಕೆಟ್ಟ ಮಾತುಗಳು ಬಾರದಿರಲಿ.
ಭಕ್ತಿಯನ್ನು ವೃದ್ಧಿಮಾಡುವಂಥ ಕಾಲೋಚಿತವಾದ ಮಾತು
ಇದ್ದರೆ ಕೇಳುವವರ ಹಿತಕ್ಕಾಗಿ ಅದನ್ನು ಆಡಿರಿ. 30ಪವಿತ್ರಾತ್ಮ
ನನ್ನು ದುಃಖಪಡಿಸಬೇಡಿ. ನೀವು ದೇವರಿಗೆ ಸೇರಿದವ
ರೆಂಬುದಕ್ಕೆ ಆತನೇ ದೇವರ ಪ್ರಮಾಣವಾಗಿದ್ದಾನೆ. ಸೂಕ್ತ
ಸಮಯದಲ್ಲಿ ನಿಮ್ಮನ್ನು ಬಿಡುಗಡೆ ಮಾಡುತ್ತೇನೆ ಎಂಬುದನ್ನು
ತೋರಿಸುವುದಕ್ಕಾಗಿಯೇ ದೇವರು ನಿಮಗೆ ಆತನನ್ನು
ಕೊಟ್ಟನು. 31ಎಲ್ಲಾ ದ್ವೇಷ, ಕೋಪ, ಕ್ರೋಧ, ಕಲಹ, ದೂಷಣೆ
ಇವುಗಳನ್ನೂ ಸಕಲ ವಿಧವಾದ ದುಷ್ಟತನವನ್ನೂ ನಿಮ್ಮಿಂದ
ದೂರಮಾಡಿರಿ. 32ಒಬ್ಬರಿಗೊಬ್ಬರು ಕರುಣೆ ತೋರಿರಿ. ಒಬ್ಬರ
ನ್ನೊಬ್ಬರು ಪ್ರೀತಿಸಿರಿ. ದೇವರು ಕ್ರಿಸ್ತನಲ್ಲಿ ನಿಮ್ಮನ್ನು ಕ್ಷಮಿಸಿದಂತೆ
ನೀವೂ ಒಬ್ಬರನ್ನೊಬ್ಬರು ಕ್ಷಮಿಸಿರಿ.

## ಬೆಳಕಿನಲ್ಲಿ ಬದುಕಿರಿ

5 ನೀವು ದೇವರ ಪ್ರಿಯ ಮಕ್ಕಳಾಗಿದ್ದೀರಿ; ಆದ್ದರಿಂದ ನೀವು
ಆತನನ್ನು ಅನುಸರಿಸಬೇಕು. 2ಪ್ರೀತಿಯಿಂದ ಬಾಳಿರಿ.
ಕ್ರಿಸ್ತನು ನಮ್ಮನ್ನು ಪ್ರೀತಿಸಿದಂತೆ ನೀವೂ ಇತರರನ್ನು ಪ್ರೀತಿಸಿರಿ.
ಕ್ರಿಸ್ತನು ನಮಗೋಸ್ಕರವಾಗಿ ತನ್ನನ್ನೇ ಪರಿಮಳದ ಕಾಣಿಕೆ
ಯಾಗಿಯೂ ಯಜ್ಞವಾಗಿಯೂ ದೇವರಿಗೆ ಸಮರ್ಪಿಸಿ
ಕೊಂಡನು. 3ಆದರೆ ನಿಮ್ಮ ಮಧ್ಯದಲ್ಲಿ ಲೈಂಗಿಕ ಪಾಪವಿರ
ಕೂಡದು. ಯಾವ ಬಗೆಯ ದುಷ್ಟತ್ವವಾಗಲಿ ಸ್ವಾರ್ಥತೆಯಾಗಲಿ
ಇರಕೂಡದು. ಏಕೆಂದರೆ ಅವುಗಳು ದೇವರ ಪರಿಶುದ್ಧ ಜನರಿಗೆ

---

**ಕೋಪಗೊಂಡರೂ... ಕೋಪದಿಂದಿರಬೇಡಿ** ಕೀರ್ತನೆ 4:4.

ಯೋಗ್ಯವಾದವುಗಳಲ್ಲ. [4]ಅಲ್ಲದೆ ನಿಮ್ಮ ಮಧ್ಯದಲ್ಲಿ ಕೆಟ್ಟ
ಮಾತುಗಳು ಇರಕೂಡದು. ನೀವು ಮೂರ್ಖತನದಿಂದ
ಮಾತಾಡಕೂಡದು ಮತ್ತು ಹೊಲಸಾದ ಹಾಸ್ಯನುಡಿಗಳನ್ನು
ಹೇಳಕೂಡದು. ಇವುಗಳು ನಿಮಗೆ ಯೋಗ್ಯವಾದುವುಗಳಲ್ಲ.
ಆದರೆ ನೀವು ದೇವರಿಗೆ ಸ್ತೋತ್ರ ಸಲ್ಲಿಸುವವರಾಗಿರಬೇಕು.
[5]ಇದು ನಿಮಗೆ ಚೆನ್ನಾಗಿ ತಿಳಿದಿರಲಿ: ಲೈಂಗಿಕ ಪಾಪಮಾಡು
ವವರಿಗೆ, ದುಷ್ಟಕಾರ್ಯಗಳನ್ನು ಮಾಡುವವರಿಗೆ, ಸ್ವಾರ್ಥಿ
ಗಳಿಗೆ, ಕ್ರಿಸ್ತನ ಮತ್ತು ದೇವರ ರಾಜ್ಯದಲ್ಲಿ ಸ್ಥಳವೇ ಇಲ್ಲ.
ಸ್ವಾರ್ಥತೆಯು ವಿಗ್ರಹಾರಾಧನೆಗೆ ಸಮಾನವಾಗಿದೆ.

[6]ಅಸತ್ಯವಾದ ಸಂಗತಿಗಳನ್ನು ಹೇಳಿ ನಿಮ್ಮನ್ನು ಮೋಸ
ಪಡಿಸಲು ಯಾರಿಗೂ ಅವಕಾಶ ಕೊಡಬೇಡಿ. ಆ ಕೆಟ್ಟಸಂಗತಿಗಳ
ನಿಮಿತ್ತ ದೇವರ ಕೋಪವು ಆತನಿಗೆ ವಿಧೇಯರಾಗದ ಜನರ
ಮೇಲೆ ಬರುತ್ತದೆ. [7]ಆದ್ದರಿಂದ ನೀವು ಅಂಥ ಜನರೊಂದಿಗೆ
ಪಾಲುಗಾರರಾಗಬೇಡಿ. [8]ಹಿಂದಿನ ಕಾಲದಲ್ಲಿ ನೀವು ಕಗ್ಗತ್ತಲೆ
ಯಾಗಿದ್ದಿರಿ. ಈಗಲಾದರೊ ನೀವು ಕರ್ತನಲ್ಲಿ ಪೂರ್ಣಬೆಳಕಾಗಿ
ದ್ದೀರಿ. ಆದ್ದರಿಂದ ಬೆಳಕಿಗೆ ಸೇರಿದ ಮಕ್ಕಳಂತೆ ಜೀವಿಸಿರಿ.
[9]ಬೆಳಕಿನ ಫಲವು ಉಪಕಾರದಲ್ಲಿಯೂ ನೀತಿಯಲ್ಲಿಯೂ ಸತ್ಯ
ದಲ್ಲಿಯೂ ಕಂಡುಬರುತ್ತದೆ. [10]ಪ್ರಭುವಿಗೆ ಯಾವುದು ಮೆಚ್ಚಿಕೆ
ಯಾದದ್ದೆಂಬುದನ್ನು ತಿಳಿದುಕೊಳ್ಳಲು ಪ್ರಯತ್ನಿಸಿ. [11]ಕತ್ತಲೆ
ಯಲ್ಲಿರುವ ಜನರು ಮಾಡುವಂಥ ಕಾರ್ಯಗಳನ್ನು ಮಾಡ
ಬೇಡಿ. ಅವುಗಳಿಂದ ಒಳ್ಳೆಯದೇನೂ ಆಗುವುದಿಲ್ಲ. ಆದರೆ
ಕತ್ತಲೆಯಲ್ಲಿ ನಡೆಯುವ ಕಾರ್ಯಗಳು ತಪ್ಪಾದವುಗಳೆಂದು
ತೋರಿಸಲು ಒಳ್ಳೆಯ ಕಾರ್ಯಗಳನ್ನು ಮಾಡಿರಿ. [12]ಆ ಜನರು
ಕತ್ತಲೆಯಲ್ಲಿ ಮಾಡುವ ಗುಪ್ತಕಾರ್ಯಗಳ ಬಗ್ಗೆ ಮಾತಾಡು
ವುದಕ್ಕೂ ನಾಚಿಕೆಯಾಗುತ್ತದೆ. [13]ಆದರೆ ಆ ಕಾರ್ಯಗಳು
ತಪ್ಪಾದವುಗಳೆಂದು ನಾವು ತೋರಿಸುವಾಗ ಬೆಳಕಿನಿಂದ ಆ
ಕಾರ್ಯಗಳು ಸ್ಪಷ್ಟವಾಗಿ ಕಾಣಿಸುತ್ತವೆ. [14]ಪ್ರತಿಯೊಂದನ್ನು
ಸ್ಪಷ್ಟವಾಗಿ ತೋರಿಸುವಂಥದ್ದೇ ಬೆಳಕು. ಆದ್ದರಿಂದಲೇ ಹೀಗೆ
ಬರೆದದೆ:

> ''ನಿದ್ರೆಮಾಡುವವನೇ, ಎಚ್ಚರವಾಗು! ಸತ್ತವರನ್ನು
> ಬಿಟ್ಟು ಎದ್ದೇಳು, ಕ್ರಿಸ್ತನು ನಿನ್ನ ಮೇಲೆ ಪ್ರಕಾಶಿ
> ಸುವನು.''

[15]ಆದ್ದರಿಂದ ನೀವು ಹೇಗೆ ಜೀವಿಸುತ್ತಿದ್ದೀರಿ ಎಂಬುದರ ಬಗ್ಗೆ
ಬಹು ಎಚ್ಚರಿಕೆಯಿಂದಿರಿ. ಅವಿವೇಕಿಗಳಂತೆ ಜೀವಿಸದೆ
ವಿವೇಕಿಗಳಾಗಿ ಜೀವಿಸಿರಿ. [16]ಈ ದಿನಗಳು ಕೆಟ್ಟವುಗಳಾಗಿವೆ.
ಆದ್ದರಿಂದ ನಿಮಗಿರುವ ಪ್ರತಿಯೊಂದು ಅವಕಾಶವನ್ನು ಒಳ್ಳೆಯ
ದಕ್ಕಾಗಿ ಉಪಯೋಗಿಸಿರಿ. [17]ನಿಮ್ಮ ಜೀವಿತಗಳ ಬಗ್ಗೆ ಮೂರ್ಖ
ರಾಗಿರದೆ ದೇವರ ಚಿತ್ತವೇನೆಂಬುದನ್ನು ತಿಳಿದುಕೊಳ್ಳಿರಿ.
[18]ಮದ್ಯಪಾನಮಾಡಿ ಮತ್ತರಾಗಬೇಡಿ. ಅದು ಪಾಪಕೃತ್ಯಗಳಿಗೆ
ನಡೆಸುತ್ತದೆ. ಆದರೆ ಯಾವಾಗಲೂ ಪವಿತ್ರಾತ್ಮಭರಿತರಾಗಿರಿ.
[19]ಕೀರ್ತನೆಗಳಿಂದಲೂ ಸಂಗೀತಗಳಿಂದಲೂ ಆತ್ಮಿಕ ಹಾಡು
ಗಳಿಂದಲೂ ಒಬ್ಬರಿಗೊಬ್ಬರು ಮಾತಾಡಿರಿ. ನಿಮ್ಮ ಹೃದಯ
ಗಳಲ್ಲಿ ಪ್ರಭುವಿಗೆ ವಾದ್ಯ ನುಡಿಸುತ್ತಾ ಹಾಡಿರಿ. [20]ಪ್ರತಿಯೊಂದು
ವಿಷಯದಲ್ಲಿಯೂ ತಂದೆಯಾದ ದೇವರಿಗೆ ನಮ್ಮ ಪ್ರಭುವಾದ
ಯೇಸು ಕ್ರಿಸ್ತನ ಹೆಸರಿನಲ್ಲಿ ಯಾವಾಗಲೂ ಸ್ತೋತ್ರ ಮಾಡಿರಿ.

## ಗಂಡ ಹೆಂಡತಿಯರು

[21]ನೀವು ಒಬ್ಬರಿಗೊಬ್ಬರು ವಿಧೇಯರಾಗಿರಬೇಕು.
ಏಕೆಂದರೆ ನೀವು ಕ್ರಿಸ್ತನಲ್ಲಿ ಭಯಭಕ್ತಿ ಉಳ್ಳವರಾಗಿರಬೇಕು.

[22]ಸ್ತ್ರೀಯರೇ, ನೀವು ಪ್ರಭುವಿಗೆ ಅಧೀನರಾಗಿರುವಂತೆ ನಿಮ್ಮ
ಗಂಡಂದಿರಿಗೂ ಅಧೀನರಾಗಿರಿ. [23]ಕ್ರಿಸ್ತನು ಸಭೆಗೆ ಶಿರಸ್ಸಾಗಿರು
ವಂತೆ ಗಂಡನು ಹೆಂಡತಿಗೆ ಶಿರಸ್ಸಾಗಿದ್ದಾನೆ. ಸಭೆಯು ಕ್ರಿಸ್ತನ
ದೇಹವಾಗಿದೆ. ಕ್ರಿಸ್ತನು ಆ ದೇಹದ ರಕ್ಷಕನಾಗಿದ್ದಾನೆ.
[24]ಸಭೆಯು ಕ್ರಿಸ್ತನ ಅಧೀನದಲ್ಲಿದೆ. ಇದೇ ನಿಯಮವು
ಸ್ತ್ರೀಯರಿಗೆ ಅನ್ವಯಿಸುತ್ತದೆ. ಪ್ರತಿಯೊಂದು ವಿಷಯ
ದಲ್ಲಿಯೂ ಸ್ತ್ರೀಯರು ತಮ್ಮ ಗಂಡಂದಿರಿಗೆ ಅಧೀನರಾಗಿರ
ಬೇಕು.

[25]ಪುರುಷರೇ, ಕ್ರಿಸ್ತನು ಸಭೆಯನ್ನು ಪ್ರೀತಿಸಿದಂತೆ ನೀವು
ನಿಮ್ಮ ಹೆಂಡತಿಯರನ್ನು ಪ್ರೀತಿಸಬೇಕು. [26]ಕ್ರಿಸ್ತನು ಸಭೆಯನ್ನು
ಪರಿಶುದ್ಧಗೊಳಿಸುವುದಕ್ಕಾಗಿ ಪ್ರಾಣಕೊಟ್ಟನು. ಸುವಾರ್ತೆ
ಯನ್ನು ತಿಳಿಸುವುದರ ಮೂಲಕ ಜಲಸ್ನಾನವನ್ನು ಮಾಡಿಸಿ
ಆತನು ಸಭೆಯನ್ನು ಶುದ್ಧಗೊಳಿಸಿದನು. [27]ಮಹಿಮಾಪೂರ್ಣ
ಳಾದ ಕನ್ನಿಕೆಯೊ ಎಂಬಂತಿರುವ ಸಭೆಯನ್ನು ತನಗೇ ಕೊಡ
ಬೇಕೆಂದು ಆತನು ಪ್ರಾಣಕೊಟ್ಟನು. ಸಭೆಯು ದೋಷವಿಲ್ಲದೆ
ಶುದ್ಧವಾಗಿರಬೇಕೆಂದು ಮತ್ತು ದುಷ್ಟತ್ವವಾಗಲಿ ಪಾಪವಾಗಲಿ
ಅಥವಾ ಬೇರೆ ಯಾವುದೇ ತಪ್ಪಾಗಲಿ ಸಭೆಯಲ್ಲಿರಕೂಡದೆಂದು
ಆತನು ಪ್ರಾಣ ಕೊಟ್ಟನು. [28]ಆದ್ದರಿಂದ ಪುರುಷರು ತಮ್ಮ ಸ್ವಂತ
ದೇಹಗಳನ್ನು ಪ್ರೀತಿಸುವಂತೆ ತಮ್ಮ ಹೆಂಡತಿಯರನ್ನು ಪ್ರೀತಿಸ
ಬೇಕು. ತನ್ನ ಹೆಂಡತಿಯನ್ನು ಪ್ರೀತಿಸುವವನು ತನ್ನನ್ನೇ ಪ್ರೀತಿಸು
ವವನಾಗಿದ್ದಾನೆ. [29]ಏಕೆಂದರೆ ಯಾವನೂ ತನ್ನ ದೇಹವನ್ನು
ದ್ವೇಷಿಸುವುದಿಲ್ಲ. ಪ್ರತಿಯೊಬ್ಬನು ತನ್ನ ದೇಹವನ್ನು ಪೋಷಿಸಿ
ಜಾಗ್ರತೆಯಿಂದ ನೋಡಿಕೊಳ್ಳುತ್ತಾನೆ. ಕ್ರಿಸ್ತನು ಸಭೆಗೋಸ್ಕರ
ಮಾಡುವಂಥದ್ದು ಅದೇ ಆಗಿದೆ. [30]ಏಕೆಂದರೆ ನಾವು ಆತನ
ದೇಹದ ಅಂಗಗಳಾಗಿದ್ದೇವೆ. [31]ಪವಿತ್ರ ಗ್ರಂಥವು ಹೇಳುವಂತೆ,
''ಪುರುಷನು ತನ್ನ ತಂದೆತಾಯಿಗಳನ್ನು ಬಿಟ್ಟು ತನ್ನ ಹೆಂಡತಿ
ಯನ್ನು ಸೇರಿಕೊಳ್ಳವನು ಮತ್ತು ಅವರಿಬ್ಬರು ಒಂದೇ ದೇಹ
ವಾಗುವರು.''* [32]ನಾನು ಕ್ರಿಸ್ತನಿಗೂ ಸಭೆಗೂ ಇರುವ
ಸಂಬಂಧವನ್ನು ಕುರಿತು ಮಾತಾಡುತ್ತಿದ್ದೇನೆ. ರಹಸ್ಯವಾದ ಈ
ಸತ್ಯವು ಬಹು ಮುಖ್ಯವಾದದ್ದು. [33]ಆದರೆ ನಿಮ್ಮಲ್ಲಿ ಪ್ರತಿ
ಪುರುಷನು ತನ್ನನ್ನು ತಾನು ಪ್ರೀತಿಸುವಂತೆ ತನ್ನ ಹೆಂಡತಿಯನ್ನು
ಪ್ರೀತಿಸಬೇಕು ಮತ್ತು ಸ್ತ್ರೀಯು ತನ್ನ ಗಂಡನಿಗೆ ಭಯ
ಭಕ್ತಿಯಿಂದಿರಬೇಕು.

## ಮಕ್ಕಳು ಮತ್ತು ತಂದೆತಾಯಿಗಳು

6 ಮಕ್ಕಳೇ, ಪ್ರಭುವಿನ ಚಿತ್ತಕ್ಕನುಸಾರವಾಗಿ ನಿಮ್ಮ ತಂದೆ
ತಾಯಿಗಳಿಗೆ ವಿಧೇಯರಾಗಿರಿ. ಅದು ನ್ಯಾಯಬದ್ಧ
ವಾದದ್ದಾಗಿದೆ. [2]ದೇವಾಜ್ಞೆಯು ಹೇಳುವಂತೆ, ''ನೀವು ನಿಮ್ಮ
ತಂದೆತಾಯಿಗಳನ್ನು ಗೌರವಿಸಬೇಕು.''* ಈ ಮೊದಲನೆಯ
ಆಜ್ಞೆಯು ವಾಗ್ದಾನವನ್ನು ಒಳಗೊಂಡಿದೆ. [3]ಆ ವಾಗ್ದಾನವು

---

**ಪುರುಷನು ... ದೇಹವಾಗುವರು** ಆದಿಕಾಂಡ 2:24.

**ನೀವು ... ಗೌರವಿಸಬೇಕು** ವಿಮೋಚನ. 20:12. ಮತ್ತು ಧರ್ಮೋಪದೇಶ. 5:16

ಇಂತಿದೆ: ‘‘ಆಗ ನಿಮಗೆ ಒಳ್ಳೆಯದಾಗುವುದು ಮತ್ತು ನೀವು ಭೂಮಿಯ ಮೇಲೆ ಬಹುಕಾಲ ಬದುಕುವಿರಿ.’’ *

4ತಂದೆಗಳೇ, ನಿಮ್ಮ ಮಕ್ಕಳನ್ನು ಸಿಟ್ಟಿಗೆಬ್ಬಿಸದೆ ಪ್ರಭುವಿನ ಉಪದೇಶದಿಂದಲೂ ಬಾಲಶಿಕ್ಷೆಯಿಂದಲೂ ಬೆಳೆಸಿರಿ.

## ಸೇವಕರು ಮತ್ತು ಯಜಮಾನರು

5ಸೇವಕರೇ, ನಿಮ್ಮ ಇಹಲೋಕದ ಯಜಮಾನರಿಗೆ ಭಯದಿಂದಲೂ ಗೌರವದಿಂದಲೂ ವಿಧೇಯರಾಗಿರಿ. ನೀವು ಕ್ರಿಸ್ತನಿಗೆ ವಿಧೇಯರಾಗುವಂತೆ ಯಥಾರ್ಥವಾದ ಹೃದಯದಿಂದ ವಿಧೇಯರಾಗಿರಿ. 6ಅವರ ಮೆಚ್ಚಿಕೆಯನ್ನು ಗಳಿಸಿಕೊಳ್ಳಬೇಕೆಂದು ಅವರು ಗಮನಿಸುತ್ತಿರುವಾಗ ಮಾತ್ರ ಸೇವೆ ಮಾಡದೆ ನೀವು ಕ್ರಿಸ್ತನಿಗೆ ವಿಧೇಯರಾಗಿರುವಂತೆ ಅವರಿಗೆ ವಿಧೇಯರಾಗಿರಬೇಕು. ದೇವರಿಗೆ ಇಷ್ಟವಾದದ್ದನ್ನು ನೀವು ಪೂರ್ಣಹೃದಯದಿಂದ ಮಾಡಬೇಕು. 7ನೀವು ಮಾಡತಕ್ಕ ಕೆಲಸವನ್ನು ಸಂತೋಷದಿಂದ ಮಾಡಿರಿ. ಕೇವಲ ಮನುಷ್ಯರ ಸೇವೆಯನ್ನು ಮಾಡುವವರಂತೆ ಮಾಡದೆ ಪ್ರಭುವಿನ ಸೇವೆಯನ್ನು ಮಾಡುವವರಂತೆ ಮಾಡಿರಿ. 8ಒಳ್ಳೆಯದನ್ನು ಮಾಡುವ ಪ್ರತಿಯೊಬ್ಬನಿಗೂ ದೇವರು ಪ್ರತಿಫಲವನ್ನು ಕೊಡುತ್ತಾನೆಂಬುದನ್ನು ಜ್ಞಾಪಕದಲ್ಲಿಟ್ಟುಕೊಳ್ಳಿರಿ. ಪ್ರತಿಯೊಬ್ಬ ವ್ಯಕ್ತಿಯು ಅವನು ಸೇವಕನಾಗಿರಲಿ ಅಥವಾ ಸ್ವತಂತ್ರನಾಗಿರಲಿ ತಾನು ಮಾಡುವ ಒಳ್ಳೆಯ ಕಾರ್ಯಗಳಿಗೆ ಪ್ರತಿಫಲವನ್ನು ಹೊಂದುವನು. 9ಯಜಮಾನರೇ, ಅದೇ ರೀತಿಯಲ್ಲಿ ನಿಮ್ಮ ಸೇವಕರಿಗೆ ಒಳ್ಳೆಯವರಾಗಿರಿ. ಅವರಿಗೆ ಹೆದರಿಕೆಯಾಗುವಂಥ ಮಾತುಗಳನ್ನಾಡಬೇಡಿ. ನಿಮಗೂ ಅವರಿಗೂ ಒಡೆಯನಾಗಿರುವಾತನು ಪರಲೋಕದಲ್ಲಿದ್ದಾನೆ ಎಂಬುದು ನಿಮಗೆ ತಿಳಿದದೆ. ಆತನು ಪ್ರತಿಯೊಬ್ಬನಿಗೂ ಪಕ್ಷಪಾತವಿಲ್ಲದೆ ನ್ಯಾಯತೀರಿಸುವನು.

## ದೇವರ ಸರ್ವಾಯುಧಗಳನ್ನು ಧರಿಸಿಕೊಳ್ಳಿರಿ

10ಕಡೇ ಮಾತೇನೆಂದರೆ, ಪ್ರಭುವಿನಲ್ಲಿಯೂ ಆತನ ಮಹಾಶಕ್ತಿಯಲ್ಲಿಯೂ ಬಲವಾಗಿರಿ. 11ದೇವರ ಸರ್ವಾಯುಧಗಳನ್ನು ಧರಿಸಿಕೊಳ್ಳಿರಿ. ಆಗ ಸೈತಾನನ ಕುತಂತ್ರಗಳಿಗೆ ವಿರುದ್ಧವಾಗಿ ಹೋರಾಡಲು ನಿಮಗೆ ಸಾಧ್ಯವಾಗುವುದು. 12ನಮ್ಮ ಹೋರಾಟವು ಜನರ ವಿರುದ್ಧವಲ್ಲ. ನಾವು ಅಂಧಕಾರದ ಅಧಿಪತಿಗಳಿಗೂ ಅಧಿಕಾರಿಗಳಿಗೂ ಮತ್ತು ಈ ಲೋಕದ ಕತ್ತಲೆಯ ಶಕ್ತಿಗಳಿಗೂ ಆಕಾಶಮಂಡಲದ ದುಷ್ಟಶಕ್ತಿಗಳಿಗೂ ವಿರುದ್ಧವಾಗಿ ಹೋರಾಡುತ್ತಿದ್ದೇವೆ. 13ಆದಕಾರಣವೇ ನೀವು ದೇವರ ಸರ್ವಾಯುಧಗಳನ್ನು ಧರಿಸಿಕೊಳ್ಳಬೇಕು. ಆಗ ಯುದ್ಧದ ದಿನದಲ್ಲಿಯೂ ಹೋರಾಟವು ಸಂಪೂರ್ಣವಾಗಿ ಮುಗಿದಾದ ಮೇಲೆಯೂ ದೃಢವಾಗಿ ನಿಂತುಕೊಳ್ಳಲು ನಿಮಗೆ ಸಾಧ್ಯವಾಗುವುದು. 14ಆದ್ದರಿಂದ ಸತ್ಯ ಎಂಬ ನಡುಕಟ್ಟನ್ನು ಕಟ್ಟಿಕೊಂಡು ನೀತಿ ಎಂಬ ವಜ್ರಕವಚನ್ನು ಎದೆಗೆ ಬಿಗಿದುಕೊಂಡು 15ಸಮಾಧಾನದ ಸುವಾರ್ತೆ ಎಂಬ ಪಾದರಕ್ಷೆಯನ್ನು ಹಾಕಿಕೊಂಡು ದೃಢವಾಗಿ ನಿಂತುಕೊಳ್ಳಿರಿ. 16ಅಲ್ಲದೆ ನಂಬಿಕೆಯೆಂಬ ಗುರಾಣಿಯನ್ನೂ ಹಿಡಿದುಕೊಳ್ಳಿರಿ. ಕೆಡುಕನ ಅಗ್ನಿಬಾಣಗಳನ್ನೆಲ್ಲಾ ತಡೆಯಲು ನಿಮಗೆ ಇದರಿಂದ ಸಾಧ್ಯವಾಗುವುದು. 17ದೇವರ ರಕ್ಷಣೆಯನ್ನು ಶಿರಸ್ತ್ರಾಣವನ್ನಾಗಿ ಧರಿಸಿಕೊಳ್ಳಿರಿ. ಪವಿತ್ರಾತ್ಮನ ಖಡ್ಗವನ್ನು ಅಂದರೆ ದೇವರ ವಾಕ್ಯವನ್ನು ತೆಗೆದುಕೊಳ್ಳಿರಿ.

18ನೀವು ಪವಿತ್ರಾತ್ಮನ ಸಹಾಯದಿಂದ ಯಾವಾಗಲೂ ದೇವರಲ್ಲಿ ಪ್ರಾರ್ಥಿಸುತ್ತಾ ಸಕಲವಿಧವಾದ ವಿಜ್ಞಾಪನೆಗಳನ್ನು ಮಾಡಿರಿ ಮತ್ತು ನಿಮಗೆ ಅಗತ್ಯವಾದವುಗಳಿಗಾಗಿ ಬೇಡಿಕೊಳ್ಳಿರಿ. ಇದಕ್ಕಾಗಿ ಯಾವಾಗಲೂ ಸಿದ್ಧರಾಗಿರಿ. ಪ್ರಾರ್ಥನೆಯನ್ನು ಬಿಟ್ಟುಕೊಡಬೇಡಿರಿ. ದೇವಜನರೆಲ್ಲರಿಗೋಸ್ಕರ ಯಾವಾಗಲೂ ಪ್ರಾರ್ಥಿಸಿರಿ.

19ಅಲ್ಲದೆ ನನಗಾಗಿಯೂ ಪ್ರಾರ್ಥಿಸಿರಿ. ನಾನು ಮಾತಾಡುವಾಗ ಸುವಾರ್ತೆಯ ಗುಪ್ತಸತ್ಯವನ್ನು ನಿರ್ಭಯದಿಂದ ತಿಳಿಸಲು ಬೇಕಾದ ಮಾತನ್ನು ದೇವರು ನನಗೆ ಅನುಗ್ರಹಿಸುವಂತೆ ಪ್ರಾರ್ಥಿಸಿರಿ. 20ಸುವಾರ್ತೆಯನ್ನು ತಿಳಿಸುವುದೇ ನನ್ನ ಕೆಲಸ. ಈಗ ಸೆರೆಮನೆಯಲ್ಲಿಯೂ ನಾನು ಆ ಕೆಲಸವನ್ನು ಮಾಡುತ್ತಿದ್ದೇನೆ. ನಾನು ಯಾವ ರೀತಿ ಮಾತಾಡಬೇಕೊ ಅದೇ ರೀತಿ ನಿರ್ಭಯದಿಂದ ಮಾತಾಡಲು ಸಾಧ್ಯವಾಗುವಂತೆ ಪ್ರಾರ್ಥಿಸಿರಿ.

## ವಂದನೆಗಳು

21ನಮ್ಮ ಪ್ರಿಯ ಸಹೋದರನಾದ ತುಖಿಕನನ್ನು ನಿಮ್ಮ ಬಳಿಗೆ ಕಳುಹಿಸುತ್ತಿದ್ದೇನೆ. ಅವನು ಪ್ರಭುವಿನ ಸೇವೆಯಲ್ಲಿ ನಂಬಿಗಸ್ತನಾದ ಸೇವಕನಾಗಿದ್ದಾನೆ. ಇಲ್ಲಿಯ ಸಂಗತಿಗಳನ್ನೆಲ್ಲಾ ಅವನು ನಿಮಗೆ ತಿಳಿಸುವನು. ನಾನು ಇಲ್ಲಿ ಹೇಗಿದ್ದೇನೆ ಮತ್ತು ಏನು ಮಾಡುತ್ತಿದ್ದೇನೆ ಎಂಬುದು ಆಗ ನಿಮಗೆ ಗೊತ್ತಾಗುವುದು. 22ನಮ್ಮ ಸ್ಥಿತಿಗತಿಗಳು ನಿಮಗೆ ತಿಳಿದಿರಬೇಕೆಂಬುದು ನನ್ನ ಇಷ್ಟ. ಅಲ್ಲದೆ ಅವನು ನಿಮ್ಮನ್ನು ಪ್ರೋತ್ಸಾಹಿಸುವನು.

23ತಂದೆಯಾದ ದೇವರಿಂದಲೂ ಪ್ರಭುವಾದ ಯೇಸು ಕ್ರಿಸ್ತನಿಂದಲೂ ನಿಮಗೆ ಶಾಂತಿಯೂ ನಂಬಿಕೆಯಿಂದ ಕೂಡಿದ ಪ್ರೀತಿಯೂ ಉಂಟಾಗಲಿ.

24ನಮ್ಮ ಪ್ರಭುವಾದ ಯೇಸು ಕ್ರಿಸ್ತನನ್ನು ನಿರಂತರವಾದ ಪ್ರೀತಿಯಿಂದ ಪ್ರೀತಿಸುವ ನಿಮ್ಮೆಲ್ಲರ ಮೇಲೆ ದೇವರ ಕೃಪೆಯಿರಲಿ.

---

**ಆಗ … ಬದುಕುವಿರಿ** ವಿಮೋಚನ. 20:12 ಮತ್ತು ಧರ್ಮೋಪದೇಶ. 5:16.

# ಫಿಲಿಪ್ಪಿಯವರಿಗೆ ಬರೆದ ಪತ್ರ

1 ಯೇಸು ಕ್ರಿಸ್ತನ ದಾಸರಾದ ಪೌಲನು ತಿಮೊಥೆಯನು
ಫಿಲಿಪ್ಪಿಯವರಿಗೆ ಬರೆಯುವ ಪತ್ರ. ಯೇಸು ಕ್ರಿಸ್ತನ
ಮೂಲಕ ದೇವರ ಪರಿಶುದ್ಧ ಜನರಾಗಿರುವವರಿಗೂ ಎಲ್ಲಾ
ಹಿರಿಯರಿಗೂ ಸಭಾಸೇವಕರಿಗೂ ನಾವು ಈ ಪತ್ರವನ್ನು
ಬರೆಯುತ್ತಿದ್ದೇವೆ.
2 ನಮ್ಮ ತಂದೆಯಾದ ದೇವರಿಂದಲೂ ಪ್ರಭುವಾದ ಯೇಸು
ಕ್ರಿಸ್ತನಿಂದಲೂ ನಿಮಗೆ ಕೃಪೆಯೂ ಶಾಂತಿಯೂ ಉಂಟಾಗಲಿ.

### ಪೌಲನ ಪ್ರಾರ್ಥನೆ

3 ನಾನು ನಿಮ್ಮನ್ನು ಜ್ಞಾಪಿಸಿಕೊಂಡಾಗಲೆಲ್ಲಾ ದೇವರಿಗೆ
ಸ್ತೋತ್ರ ಸಲ್ಲಿಸುತ್ತೇನೆ. 4 ನಾನು ನಿಮ್ಮೆಲ್ಲರಿಗಾಗಿ ಯಾವಾಗಲೂ
ಆನಂದದಿಂದ ಪ್ರಾರ್ಥಿಸುತ್ತೇನೆ. 5 ನನ್ನ ಸುವಾರ್ತಾಸೇವೆಯಲ್ಲಿ
ನೀವು ಪಾಲುಗಾರರಾದ ಕಾರಣ ದೇವರಿಗೆ ಸ್ತೋತ್ರ ಸಲ್ಲಿಸು
ತ್ತೇನೆ. ನೀವು ನಂಬಿಕೊಂಡಂದಿನಿಂದ ಇಲ್ಲಿಯವರೆಗೂ ನನಗೆ
ಸಹಾಯ ಮಾಡಿದಿರಿ. 6 ದೇವರು ನಿಮ್ಮಲ್ಲಿ ಒಳ್ಳೆಯ ಕಾರ್ಯ
ವನ್ನು ಆರಂಭಿಸಿ ನಡೆಸಿಕೊಂಡು ಬರುತ್ತಿದ್ದಾನೆ. ಯೇಸು ಕ್ರಿಸ್ತನು
ಮತ್ತೆ ಬಂದಾಗ ದೇವರು ಆ ಕಾರ್ಯವನ್ನು ಸಂಪೂರ್ಣ
ಗೊಳಿಸುವನೆಂದು ನನಗೆ ಭರವಸೆ ಇದೆ. 7 ನಿಮ್ಮೆಲ್ಲರ
ವಿಷಯದಲ್ಲಿ ಈ ರೀತಿ ಆಲೋಚಿಸುವುದು ನ್ಯಾಯಬದ್ಧವಾದ
ದ್ದೆಂದು ನನಗೆ ಗೊತ್ತಿದೆ. ನೀವು ನನ್ನ ಹೃದಯದಲ್ಲಿರುವುದ
ರಿಂದ, ನಾನು ನಿಮಗೆ ತುಂಬ ಸಮೀಪಸ್ಥನಾಗಿದ್ದೇನೆಂದು
ಭಾವಿಸುತ್ತೇನೆ. ನೀವೆಲ್ಲರೂ ನನ್ನೊಂದಿಗೆ ದೇವರ ಕೃಪೆಯಲ್ಲಿ
ಪಾಲುಗಾರರಾದ ಕಾರಣ ನೀವು ನನಗೆ ಸಮೀಪರಾಗಿದ್ದೀರಿ.
ನಾನು ಸೆರೆಯಲ್ಲಿರುವಾಗಲೂ ಸುವಾರ್ತೆಯನ್ನು ಪ್ರತಿಪಾದಿಸು
ವಾಗಲೂ ನಿರೂಪಿಸುವಾಗಲೂ ನೀವು ನನ್ನೊಂದಿಗೆ ದೇವರ
ಕೃಪೆಯಲ್ಲಿ ಪಾಲುಗಾರರಾಗಿದ್ದೀರಿ. 8 ನಾನು ನಿಮ್ಮನ್ನು
ನೋಡಲು ಬಹು ತವಕಪಡುತ್ತಿದ್ದೇನೆಂಬುದು ದೇವರಿಗೆ
ಗೊತ್ತಿದೆ. ಯೇಸು ಕ್ರಿಸ್ತನಿಂದ ತೋರಿಬಂದ ಪ್ರೀತಿಯಿಂದ
ನಾನು ನಿಮ್ಮೆಲ್ಲರನ್ನು ಪ್ರೀತಿಸುತ್ತೇನೆ. ನಿಮಗಾಗಿ ನಾನು
ಪ್ರಾರ್ಥಿಸುವುದೇನಂದರೆ:

9 ನೀವು ಪ್ರೀತಿಯಲ್ಲಿ ವೃದ್ಧಿಯಾಗುತ್ತಾ ಜ್ಞಾನ
ವಂತರೂ ತಿಳಿವಳಿಕೆಯುಳ್ಳವರೂ ಆಗಬೇಕು.
10 ಒಳಿತುಕೆಡಕುಗಳಿಗಿರುವ ವ್ಯತ್ಯಾಸವನ್ನು ಅರಿತು
ಕೊಂಡು ಒಳ್ಳೆಯದನ್ನೇ ಆರಿಸಿಕೊಳ್ಳುವಂಥವ
ರಾಗಬೇಕು; ಕ್ರಿಸ್ತನ ಬರುವಿಕೆಯಲ್ಲಿ ನೀವು
ಪರಿಶುದ್ಧರಾಗಿಯೂ ನಿರ್ದೋಷಿಗಳಾಗಿಯೂ
ಇರಬೇಕು.
11 ಕ್ರಿಸ್ತನ ಸಹಾಯದಿಂದ ದೇವರಿಗೆ ಘನತೆಯನ್ನೂ
ಸ್ತೋತ್ರವನ್ನೂ ಉಂಟುಮಾಡುವುದಕ್ಕಾಗಿ ನೀವು
ಅನೇಕ ಕಾರ್ಯಗಳನ್ನು ಮಾಡುವಂಥವ
ರಾಗಬೇಕು.

### ಪೌಲನ ಕಷ್ಟಗಳು ಸುವಾರ್ತಾ ಸೇವೆಗೆ ಸಹಾಯಕವಾಗಿವೆ

12 ಸಹೋದರ ಸಹೋದರಿಯರೇ, ನನಗೆ ಸಂಭವಿಸಿದ
ಕಷ್ಟಗಳು ಸುವಾರ್ತೆಯನ್ನು ಹಬ್ಬಿಸಲು ಸಹಾಯಕವಾದವೆಂದು
ನಿಮಗೆ ತಿಳಿದಿರಬೇಕೆಂಬುದಾಗಿ ಅಪೇಕ್ಷಿಸುತ್ತೇನೆ. 13 ನಾನು ಏಕೆ
ಸೆರೆಮನೆಯಲ್ಲಿದ್ದೇನೆಂಬುದು ಸ್ಪಷ್ಟವಾಗಿಯೇ ಇದೆ. ನಾನು ಕ್ರಿಸ್ತ
ವಿಶ್ವಾಸಿಯಾಗಿರುವುದರಿಂದ ಸೆರೆಮನೆಯಲ್ಲಿದ್ದೇನೆ. ಇಲ್ಲಿಯ
ಕಾವಲುಗಾರರಿಗೂ ಅರಮನೆಯ ಇತರ ಜನರೆಲ್ಲರಿಗೂ ಇದು
ಗೊತ್ತಿದೆ. 14 ನಾನಿನ್ನೂ ಸೆರೆಮನೆಯಲ್ಲಿದ್ದೇನೆ. ಆದರೆ ನನ್ನ ಈ
ಸ್ಥಿತಿಯಿಂದ ಅನೇಕ ವಿಶ್ವಾಸಿಗಳು ಪ್ರೋತ್ಸಾಹಿತರಾಗಿ ಕ್ರಿಸ್ತನ
ವಿಷಯವಾದ ಸಂದೇಶವನ್ನು ಮತ್ತಷ್ಟು ಧೈರ್ಯದಿಂದ ಜನರಿಗೆ
ಹೇಳುತ್ತಿದ್ದಾರೆ.
15 ಕೆಲವರು ತಮ್ಮಲ್ಲಿರುವ ಅಸೂಯೆಯಿಂದಲೂ ವೈಮನಸ್ಸಿ
ನಿಂದಲೂ ಇನ್ನು ಕೆಲವರು ಸಹಾಯ ಮಾಡಬೇಕೆಂಬ
ಉದ್ದೇಶದಿಂದಲೂ ಕ್ರಿಸ್ತನ ವಿಷಯವಾಗಿ ಬೋಧಿಸುತ್ತಾರೆ.
16 ಇವರು ತಮ್ಮಲ್ಲಿ ಪ್ರೀತಿಯಿರುವುದರಿಂದಲೇ ಜನರಿಗೆ
ಬೋಧಿಸುತ್ತಾರೆ. ಸುವಾರ್ತೆಯನ್ನು ಪ್ರತಿಪಾದಿಸುವ ಕೆಲಸವನ್ನು
ದೇವರು ನನಗೆ ಕೊಟ್ಟನೆಂಬುದು ಇವರಿಗೆ ಗೊತ್ತಿದೆ. 17 ಬೇರೆ
ಕೆಲವರು ತಮ್ಮ ಸ್ವಾರ್ಥದ ದೆಸೆಯಿಂದ ಕ್ರಿಸ್ತನ ವಿಷಯವಾಗಿ
ಬೋಧಿಸುತ್ತಾರೆ. ಅವರ ಸುವಾರ್ತಾ ಸೇವೆಯ ಉದ್ದೇಶವೇ
ತಪ್ಪಾಗಿದೆ. ಸೆರೆಯಲ್ಲಿರುವ ನನಗೆ ತೊಂದರೆ ಮಾಡ
ಬೇಕೆಂಬುದೇ ಅವರ ಅಪೇಕ್ಷೆ.
18 ಅವರು ನನಗೆ ತೊಂದರೆ ಮಾಡಿದರೂ ನಾನು ಚಿಂತಿಸುವು
ದಿಲ್ಲ. ಅವರ ಉದ್ದೇಶವು ಯಥಾರ್ಥವಾಗಿದ್ದರೂ ಯಥಾರ್ಥ
ವಾಗಿಲ್ಲದಿದ್ದರೂ ನನಗದು ಮುಖ್ಯವಲ್ಲ. ಅವರು ಕ್ರಿಸ್ತನ
ವಿಷಯವಾಗಿ ಜನರಿಗೆ ಬೋಧಿಸುತ್ತಿರುವುದರಿಂದ ನಾನು
ಉಲ್ಲಾಸಿಸುತ್ತೇನೆ, ಇನ್ನು ಮುಂದೆಯೂ ಉಲ್ಲಾಸಿಸುತ್ತೇನೆ.
19 ನೀವು ನನಗೋಸ್ಕರ ಪ್ರಾರ್ಥಿಸುತ್ತಿದ್ದೀರಿ ಮತ್ತು ಯೇಸು
ಕ್ರಿಸ್ತನ ಆತ್ಮನು ನನಗೆ ಸಹಾಯ ಮಾಡುತ್ತಿದ್ದಾನೆ. ಆದ್ದರಿಂದ
ನನ್ನ ಈ ಕಷ್ಟವು ನನಗೆ ರಕ್ಷಣೆಯನ್ನು ಉಂಟು ಮಾಡುವುದೆಂದು
ನನಗೆ ಗೊತ್ತಿದೆ. 20 ನಾನು ಯಾವ ವಿಷಯದಲ್ಲಿಯೂ ನಾಚಿಕೆ
ಪಡದೆ ಎಂದಿನಂತೆ ಈಗಲೂ ಸಹ ಧೈರ್ಯದಿಂದ ಇದ್ದೇನೆ.
ನಾನು ಬದುಕಿದರೂ ಸರಿ, ಸತ್ತರೂ ಸರಿ ನನ್ನ ದೇಹದ ಮೂಲಕ
ಕ್ರಿಸ್ತನಿಗೆ ಮಹಿಮೆ ಉಂಟಾಗಬೇಕೆಂಬುದೇ ನನ್ನ ಅಭಿಲಾಷೆ

ಮತ್ತು ನಿರೀಕ್ಷೆ. 21ನನಗಂತೂ ಬದುಕುವುದೆಂದರೆ ಕ್ರಿಸ್ತನೇ,
ಸಾಯುವುದೆಂದರೆ ಲಾಭವೇ. 22ನಾನು ಜೀವದಿಂದಿದ್ದರೆ
ಫಲಪಲಿಸುವ ಕೆಲಸ ನನಗಿರುತ್ತದೆ. ಆದರೆ ನಾನು ಸಾಯ
ಬೇಕೇ? ಅಥವಾ ಬದುಕಬೇಕೇ? ಏನನ್ನು ಆರಿಸಿಕೊಳ್ಳ
ಬೇಕೋ ನನಗೆ ಗೊತ್ತಿಲ್ಲ. 23ಇವೆರಡರಲ್ಲಿ ಯಾವುದನ್ನು ಆರಿಸಿ
ಕೊಳ್ಳಬೇಕೆಂಬುದೇ ಕಷ್ಟ.. ನಾನು ಈ ಜೀವಿತವನ್ನು ಬಿಟ್ಟು ಆತ
ನೊಂದಿಗಿರಲು ಅಪೇಕ್ಷಿಸುತ್ತೇನೆ. ಅದೇ ಉತ್ತಮವಾದದ್ದು.
24ಆದರೆ ನಾನಿಲ್ಲಿ ಇಹಲೋಕದ ಶರೀರದಲ್ಲಿರುವುದು ನಿಮಗೆ
ಅಗತ್ಯವಾಗಿದೆ. 25ಆದ್ದರಿಂದ ನಾನು ಜೀವದಿಂದುಳಿದು
ನಿಮ್ಮೊಂದಿಗೆ ಇರುತ್ತೇನೆಂದು ನನಗೆ ಗೊತ್ತಿದೆ. ನೀವು ನಂಬಿಕೆ
ಯಲ್ಲಿ ವೃದ್ಧಿಯಾಗಿ ಆನಂದಿಸುವಂತೆ ನಿಮಗೆ ನೆರವಾಗುತ್ತೇನೆ.
26ನಾನು ಮತ್ತೆ ನಿಮ್ಮೊಂದಿಗಿರುವಾಗ ನೀವು ಕ್ರಿಸ್ತಯೇಸುವಿನಲ್ಲಿ
ನನ್ನ ವಿಷಯವಾಗಿ ಹೆಮ್ಮೆಪಡಲು ಮತ್ತಷ್ಟು ಕಾರಣಗಳಿರುತ್ತವೆ.
27ಆದೇನೇ ಇರಲಿ, ಕ್ರಿಸ್ತನ ಸುವಾರ್ತೆಗೆ ಯೋಗ್ಯರಾಗಿ
ಬಾಳಿರಿ. ಆಗ ನಾನು ನಿಮ್ಮ ಬಳಿಗೆ ಬಂದರೂ ಸರಿ, ನಿಮ್ಮಿಂದ
ದೂರದಲ್ಲಿದ್ದರೂ ಸರಿ, ನಿಮ್ಮ ವಿಷಯದಲ್ಲಿ ಒಳ್ಳೆಯ ಸಂಗತಿ
ಗಳನ್ನು ಕೇಳುತ್ತೇನೆ. ನೀವು ಒಂದೇ ಉದ್ದೇಶದಿಂದ ದೃಢವಾಗಿ
ದ್ದೀರೆಂದೂ ಸುವಾರ್ತೆಯಿಂದ ಉಂಟಾದ ನಂಬಿಕೆಗೋಸ್ಕರ
ಏಕಮನಸ್ಸಿನಿಂದ ಕೆಲಸ ಮಾಡುತ್ತಿದ್ದೀರೆಂದೂ ಕೇಳುತ್ತಲೇ
ಇರುತ್ತೇನೆ. 28ಅಲ್ಲದೆ ನಿಮ್ಮನ್ನು ವಿರೋಧಿಸುವ ಜನರಿಗೆ ನೀವು
ಹೆದರಿಕೊಳ್ಳುವುದಿಲ್ಲ. ನಿಮ್ಮ ರಕ್ಷಣೆಗೂ ನಿಮ್ಮ ವೈರಿಗಳ
ನಾಶಕ್ಕೂ ಇವುಗಳು ದೇವರಿಂದಾದ ಪ್ರಮಾಣಗಳಾಗಿವೆ.
29ನೀವು ಕ್ರಿಸ್ತನಲ್ಲಿ ನಂಬಿಕೆಯಿಟ್ಟದ್ದು ದೇವರ ಅನುಗ್ರಹ
ದಿಂದಲೇ. ಅಷ್ಟು ಮಾತ್ರವೇ ಅಲ್ಲ, ಕ್ರಿಸ್ತನಿಗೋಸ್ಕರ ಕಷ್ಟ
ಪಡುವುದೂ ಸಹ ನಿಮಗೆ ಅನುಗ್ರಹವಾಗಿ ದೊರೆಯಿತು.
ಇವೆರಡೂ ಕ್ರಿಸ್ತನಿಗೆ ಮಹಿಮೆಯನ್ನು ಉಂಟುಮಾಡುತ್ತವೆ.
30ನಾನು ನಿಮ್ಮ ಮಧ್ಯದಲ್ಲಿದ್ದಾಗ ಸುವಾರ್ತೆಗೆ ವಿರುದ್ಧವಾಗಿದ್ದ
ಜನರೊಂದಿಗೆ ಮಾಡಿದ ಹೋರಾಟವನ್ನು ನೋಡಿದ್ದೀರಿ.
ಈಗಲೂ ನನಗಿರುವ ಹೋರಾಟದ ಬಗ್ಗೆ ಕೇಳುತ್ತಿದ್ದೀರಿ. ಸ್ವತಃ
ನೀವೇ ಈ ರೀತಿಯ ಹೋರಾಟವನ್ನು ಹೊಂದಿದ್ದೀರಿ.

## ಐಕ್ಯಮತದಿಂದಿದ್ದು ಒಬ್ಬರನ್ನೊಬ್ಬರು ಪರಾಂಬರಿಸಿರಿ

2 ನಿಮ್ಮಲ್ಲಿ ಕ್ರಿಸ್ತನಿಂದಾದ ಉತ್ತೇಜನ, ಪ್ರೀತಿಯ ಪ್ರೇರಣೆ,
ಪವಿತ್ರಾತ್ಮನ ಅನ್ಯೋನ್ಯತೆ, ಕಾರುಣ್ಯ ದಯಾರಸಗಳು
ಇವೆಯೋ? 2ನಿಮ್ಮಲ್ಲಿ ಇವುಗಳು ಇರುವುದಾದರೆ, ನೀವೆಲ್ಲರೂ
ಏಕಮನಸ್ಸುಳ್ಳವರಾಗಿರಿ. ಆಗ ನನ್ನ ಸಂತೋಷವು ಪರಿಪೂರ್ಣ
ವಾಗುವುದು. ಒಬ್ಬರಿಗೊಬ್ಬರು ಒಂದೇ ಪ್ರೀತಿ ಉಳ್ಳವರಾಗಿರಿ.
ಅನ್ಯೋನ್ಯಭಾವ ಉಳ್ಳವರಾಗಿದ್ದು ಒಂದೇ ಗುರಿಯಿಂದ
ಜೀವಿಸಿರಿ. 3ನೀವು ಯಾವುದನ್ನೇ ಮಾಡುವಾಗ, ಸ್ವಾರ್ಥವಾಗಲಿ
ಅಹಂಕಾರವಾಗಲಿ ನಿಮಗೆ ಮಾರ್ಗದರ್ಶಕವಾಗದಂತೆ ನೋಡಿ
ಕೊಳ್ಳಿರಿ. ದೀನ ಭಾವವುಳ್ಳವರಾಗಿದ್ದು ನಿಮಗಿಂತಲೂ ಹೆಚ್ಚಾಗಿ
ಬೇರೆಯವರಿಗೆ ಗೌರವವನ್ನು ಕೊಡಿರಿ. 4ನಿಮ್ಮ ಅಭಿಲಾಷೆಗಳ
ಬಗ್ಗೆ ಮಾತ್ರ ಚಿಂತಿಸದೆ ಇತರರ ಜೀವಿತದ ಬಗ್ಗೆಯೂ ಚಿಂತಿಸಿರಿ.

## ನಿಸ್ವಾರ್ಥರಾಗಿರುವುದನ್ನು ಕ್ರಿಸ್ತನಿಂದ ಕಲಿತುಕೊಳ್ಳಿರಿ

5ಕ್ರಿಸ್ತ ಯೇಸುವಿನಲ್ಲಿದ್ದಂಥ ಮನಸ್ಸು ನಿಮ್ಮಲ್ಲಿಯೂ ಇರಲಿ.
6ಆತನು ದೇವಸ್ವರೂಪನಾಗಿದ್ದರೂ ದೇವರಿಗೆ ಸರಿಸಮನಾಗಿ
ದ್ದರೂ ಆ ಪದವಿಯನ್ನು ಬಿಡಲಾರೆ ಎನ್ನಲಿಲ್ಲ.
7ಆ ಪದವಿಯನ್ನು ಆತನು ಬಿಟ್ಟುಕೊಟ್ಟು ಸೇವಕನ
ಸ್ವಭಾವವನ್ನು ಧರಿಸಿಕೊಂಡು ಮಾನವ ರೂಪದಲ್ಲಿ ಬಂದನು.
8ಆತನು ಮನುಷ್ಯನಾಗಿ ಜೀವಿಸುತ್ತಿದ್ದಾಗ ತನ್ನನ್ನು ತಗ್ಗಿಸಿ
ಕೊಂಡು ಮರಣವನ್ನೂ ಕಡೆಗಣಿಸಿ ದೇವರಿಗೆ ಸಂಪೂರ್ಣ
ವಿಧೇಯನಾಗಿ, ಶಿಲುಬೆಯ ಮೇಲೆಯೇ ಪ್ರಾಣಕೊಟ್ಟನು.
9ಆದ್ದರಿಂದ ದೇವರು ಆತನನ್ನು ಅತ್ಯುನ್ನತವಾದ ಸ್ಥಾನಕ್ಕೇರಿಸಿ
ಉಳಿದೆಲ್ಲ ಹೆಸರುಗಳಿಗಿಂತ ಶ್ರೇಷ್ಠವಾದ ಹೆಸರನ್ನು ಆತನಿಗೆ
ದಯಪಾಲಿಸಿದ್ದಾನೆ. 10ಆದುದರಿಂದ ಪರಲೋಕದಲ್ಲಿಯೂ
ಭೂಲೋಕದಲ್ಲಿಯೂ ಪಾತಾಳದಲ್ಲಿಯೂ ಇರುವ ಪ್ರತಿ
ಯೊಬ್ಬರು ಯೇಸುವಿನ ಹೆಸರಿನಲ್ಲಿ ಅಡ್ಡಬಿದ್ದು, 11‘‘ಯೇಸು
ಕ್ರಿಸ್ತನೇ ಪ್ರಭು’’ವೆಂದು ಹೇಳುವರು. ಇದರಿಂದ ತಂದೆಯಾದ
ದೇವರಿಗೆ ಮಹಿಮೆ ಉಂಟಾಗುವುದು.

## ದೇವರ ಇಷ್ಟಕ್ಕನುಸಾರವಾದ ಜನರಾಗಿರಿ

12ನನ್ನ ಪ್ರಿಯ ಸ್ನೇಹಿತರೇ, ನಾನು ನಿಮ್ಮಲ್ಲಿದ್ದಾಗ ನೀವು
ಯಾವಾಗಲೂ ನನ್ನ ಮಾತಿನಂತೆ ನಡೆದುಕೊಂಡಿರಿ. ಈಗ ನಾನು
ದೂರವಿರುವಾಗಲೂ ಇನ್ನೂ ಹೆಚ್ಚಿನ ಆಸಕ್ತಿಯಿಂದ ನಡೆದು
ಕೊಳ್ಳಿರಿ. ನೀವು ದೇವರಿಗೆ ಭಯಭಕ್ತಿಯಿಂದಿದ್ದು ನಿಮ್ಮ ರಕ್ಷಣೆ
ಯನ್ನು ಸಾಧಿಸಿಕೊಳ್ಳಿರಿ. 13ಹೌದು, ಆತನಿಗೆ ಮೆಚ್ಚಿಕೆಕರವಾದ
ಕಾರ್ಯಗಳನ್ನು ಮಾಡಬೇಕೆಂಬ ಅಪೇಕ್ಷೆಯನ್ನು ಆತನೇ
ನಿಮ್ಮಲ್ಲಿ ಹುಟ್ಟಿಸುತ್ತಾನೆ. ಮತ್ತು ಅವುಗಳನ್ನು ಮಾಡಲು ಆತನೇ
ನಿಮಗೆ ಶಕ್ತಿಯನ್ನು ಕೊಡುತ್ತಾನೆ.
14ನೀವು ಮಾಡುವ ಪ್ರತಿಯೊಂದನ್ನು ಗುಣಗುಟ್ಟದೆಯೂ
ವಿವಾದವಿಲ್ಲದೆಯೂ ಮಾಡಿರಿ. 15ಆಗ ಮುಗ್ಧರೂ ಪರಿ
ಶುದ್ಧರೂ ಆಗಿದ್ದು ಕಳಂಕರಹಿತವಾದ ದೇವಮಕ್ಕಳಾಗಿರು
ತ್ತೀರಿ. ದುಷ್ಟಜನರ ಮಧ್ಯದಲ್ಲಿ ವಾಸವಾಗಿರುವ ನೀವು
ಕಾರ್ಗತ್ತಲೆಯಲ್ಲಿ ಪ್ರಕಾಶಿಸುವ ನಕ್ಷತ್ರಮಂಡಲದಂತಿದ್ದೀರಿ.
16ಜೀವದಾಯಕವಾದ ವಾಕ್ಯವನ್ನು ನೀವು ಆ ಜನರಿಗೆ ಕೊಟ್ಟರೆ,
ಕ್ರಿಸ್ತನು ಬಂದಾಗ ನಾನು ಹೆಮ್ಮೆಯಿಂದಿರಲು ಸಾಧ್ಯವಾಗುತ್ತದೆ,
ಏಕೆಂದರೆ ನನ್ನ ಕೆಲಸವು ವ್ಯರ್ಥವಾಗಲಿಲ್ಲ. ನಾನು ಪಂದ್ಯದಲ್ಲಿ
ಓಡಿ ಗೆದ್ದೆನು.
17ನೀವು ನಿಮ್ಮ ಜೀವಿತಗಳನ್ನು ದೇವರ ಸೇವೆಗಾಗಿ
ಯಜ್ಞದೋಪಾದಿಯಲ್ಲಿ ಅರ್ಪಿಸಿಕೊಳ್ಳಲು ನಿಮ್ಮ ನಂಬಿಕೆಯು
ನಿಮ್ಮನ್ನು ಪ್ರೇರೇಪಿಸುತ್ತದೆ. ಒಂದುವೇಳೆ, ನಿಮ್ಮ ಯಜ್ಞ
ದೊಡನೆ ನಾನೇ ಪಾನದ್ರವ್ಯವಾಗಿ ಅರ್ಪಿತವಾಗಬೇಕಾದರೂ
ಸಂತೋಷಿಸುತ್ತೇನೆ, ನಿಮ್ಮೆಲ್ಲರೊಂದಿಗೆ ಸಂತೋಷಿಸುತ್ತೇನೆ.
18ಹಾಗೆಯೇ ನೀವು ಸಹ ಸಂತೋಷಿಸಿರಿ, ನನ್ನೊಂದಿಗೆ
ಸಂತೋಷಿಸಿರಿ.

## ತಿಮೊಥೆ ಮತ್ತು ಎಪಫ್ರೊದೀತರ ಸುದ್ದಿ

19ನಿಮ್ಮ ಬಳಿಗೆ ತಿಮೊಥೆಯನನ್ನು ಆದಷ್ಟು ಬೇಗನೆ
ಕಳುಹಿಸಿಕೊಡಲು ಪ್ರಭುವಾದ ಯೇಸುವಿನಲ್ಲಿ ನಿರೀಕ್ಷಿಸು
ತ್ತಿದ್ದೇನೆ. ಅವನ ಮೂಲಕ ನಿಮ್ಮ ಯೋಗಕ್ಷೇಮವನ್ನು ತಿಳಿದು
ಕೊಳ್ಳುವುದರಿಂದ ನನಗೆ ಪ್ರೋತ್ಸಾಹವಾಗಬಹುದು. 20ಅವ
ನಂತೆ ನಿಮ್ಮ ವಿಷಯದಲ್ಲಿ ನಿಜವಾಗಿಯೂ ಚಿಂತಿಸುವವರು ನನ್ನ
ಬಳಿ ಯಾರೂ ಇಲ್ಲ. 21ಉಳಿದವರು ಕೇವಲ ತಮ್ಮ ಬಗ್ಗೆ
ಚಿಂತಿಸುತ್ತಾರೆಯೇ ಹೊರತು ಕ್ರಿಸ್ತಯೇಸುವಿನ ಸೇವೆಯ ಬಗ್ಗೆ

ಚಿಂತಿಸುವುದಿಲ್ಲ. 22ತಿಮೊಥೆಯನು ಎಂಥವನೆಂಬುದು ನಿಮಗೆ
ಗೊತ್ತಿದೆ. ಮಗನು ತನ್ನ ತಂದೆಯೊಡನೆ ಸೇವೆ ಮಾಡುವಂತೆ
ಅವನು ಸುವಾರ್ತೆಯನ್ನು ತಿಳಿಸುವುದರಲ್ಲಿ ನನ್ನೊಂದಿಗೆ ಸೇವೆ
ಮಾಡಿದನು. 23ನನ್ನ ಬಗ್ಗೆ ನಡೆಯುತ್ತಿರುವ ವಿಚಾರಣೆಯ
ಫಲಿತಾಂಶವು ತಿಳಿದಕೂಡಲೇ ಅವನನ್ನು ನಿಮ್ಮ ಬಳಿಗೆ
ಕಳುಹಿಸುತ್ತೇನೆ. 24ಅಲ್ಲದೆ ಪ್ರಭುವಿನ ಸಹಾಯದಿಂದ ನಿಮ್ಮ
ಬಳಿಗೆ ಆದಷ್ಟು ಬೇಗನೆ ಬರುತ್ತೇನೆ ಎಂಬ ಭರವಸೆ ನನಗಿದೆ.

25ಎಪಫ್ರೊದೀತನು ಕ್ರಿಸ್ತನಲ್ಲಿ ನನ್ನ ಸಹೋದರನಾಗಿದ್ದಾನೆ.
ಕ್ರಿಸ್ತನ ಸೈನ್ಯದಲ್ಲಿ ಅವನು ನನ್ನೊಂದಿಗೆ ಕೆಲಸ ಮಾಡುತ್ತಿದ್ದಾನೆ
ಮತ್ತು ಸೇವೆ ಮಾಡುತ್ತಿದ್ದಾನೆ. ನನಗೆ ಸಹಾಯಬೇಕಿದ್ದಾಗ,
ನೀವು ಅವನನ್ನು ನನ್ನ ಬಳಿಗೆ ಕಳುಹಿಸಿಕೊಟ್ಟಿರಿ. ಈಗ ನಾನು
ಅವನನ್ನು ನಿಮ್ಮ ಬಳಿಗೆ ಮತ್ತೆ ಕಳುಹಿಸಬೇಕೆಂದಿದ್ದೇನೆ.
26ಏಕೆಂದರೆ ಅವನು ನಿಮ್ಮೆಲ್ಲರನ್ನು ನೋಡಲು ಬಹು ತವಕ
ಪಡುತ್ತಿದ್ದಾನೆ. ತಾನು ಅಸ್ವಸ್ಥನಾಗಿದ್ದದ್ದು ನಿಮಗೆ ತಿಳಿದದ್ದರಿಂದ
ಅವನಿಗೆ ಚಿಂತೆಯಾಗಿದೆ. 27ಅವನು ಅನಾರೋಗ್ಯದಿಂದ
ಸಾಯುವ ಸ್ಥಿತಿಯಲ್ಲಿದ್ದನು. ಆದರೆ ದೇವರು ಅವನನ್ನು ಕರುಣಿ
ಸಿದನು; ಅವನನ್ನು ಮಾತ್ರವಲ್ಲದೆ ನನ್ನನ್ನು ಸಹ ಕರುಣಿಸಿದನು.
28ಆದ್ದರಿಂದ ಅವನನ್ನು ನಿಮ್ಮ ಬಳಿಗೆ ಕಳುಹಿಸಿಕೊಡಲು ನಾನು
ಬಹಳ ತವಕಪಡುತ್ತಿದ್ದೇನೆ. ನೀವು ಅವನನ್ನು ನೋಡಿದಾಗ
ಸಂತೋಷಪಡುತ್ತೀರಿ ಮತ್ತು ನಿಮ್ಮ ವಿಷಯದಲ್ಲಿ ನನಗಿರುವ
ಚಿಂತೆಯು ಕೊನೆಗೊಳ್ಳುತ್ತದೆ. 29ಮಹಾ ಆನಂದದಿಂದ
ಪ್ರಭುವಿನಲ್ಲಿ ಅವನನ್ನು ಸ್ವಾಗತಿಸಿರಿ. ಎಪಫ್ರೊದೀತನಂಥ
ಜನರನ್ನು ಗೌರವಿಸಿರಿ. 30ಅವನು ಕ್ರಿಸ್ತನ ಕೆಲಸಕ್ಕಾಗಿ ಬಹು
ಮಟ್ಟಿಗೆ ತನ್ನ ಪ್ರಾಣವನ್ನೇ ಕೊಟ್ಟದ್ದರಿಂದ ಅವನಿಗೆ ಮಾನ್ಯತೆ
ದೊರೆಯಬೇಕು. ನನಗೆ ಸಹಾಯ ಮಾಡಲು ಅವನು ತನ್ನ
ಪ್ರಾಣವನ್ನೇ ಅಪಾಯಕ್ಕೆ ಈಡುಮಾಡಿಕೊಂಡನು. ಈ ರೀತಿಯ
ಸಹಾಯ ಮಾಡಲು ನಿಮಗೆ ಸಾಧ್ಯವಾಗಲಿಲ್ಲ.

### ಕ್ರಿಸ್ತನೇ ಎಲ್ಲಕ್ಕಿಂತಲೂ ಮುಖ್ಯ

3 ನನ್ನ ಸಹೋದರ ಸಹೋದರಿಯರೇ, ಪ್ರಭುವಿನಲ್ಲಿ
ಸಂತೋಷವಾಗಿರಿ. ನಾನು ಮೊದಲು ಬರೆದದ್ದನ್ನೇ ಮತ್ತೆ
ಬರೆಯಲು ನನಗೆ ಬೇಸರವೇನೂ ಇಲ್ಲ; ಏಕೆಂದರೆ ಅದು
ನಿಮ್ಮನ್ನು ಮತ್ತಷ್ಟು ಸಂರಕ್ಷಿಸುತ್ತದೆ. 2ಕೇಡು ಮಾಡುವಂಥ
ಜನರ ವಿಷಯದಲ್ಲಿ ಎಚ್ಚರಿಕೆಯಿಂದಿರಿ. ಅವರು ನಾಯಿ
ಗಳಂತಿದ್ದಾರೆ. ಸುನ್ನತಿ ಎಂದು ಹೇಳಿಕೊಂಡು ಅಂಗಚ್ಛೇದನೆ
ಮಾಡುವವರ ವಿಷಯದಲ್ಲಿ ಎಚ್ಚರಿಕೆಯಾಗಿರಿ. 3ನಾವಾದರೊ
ನಿಜವಾದ ಸುನ್ನತಿಯನ್ನು ಹೊಂದಿದವರಾಗಿದ್ದೇವೆ; ದೇವರನ್ನು
ಆತ್ಮನ ಮೂಲಕ ಆರಾಧಿಸುವವರಾಗಿದ್ದೇವೆ. ನಾವು ಕ್ರಿಸ್ತ
ಯೇಸುವಿನಲ್ಲಿರಲು ಹೆಮ್ಮೆಪಡುತ್ತೇವೆ. ನಾವು ನಮ್ಮ ಮೇಲಾ
ಗಲಿ ನಾವು ಮಾಡಬಲ್ಲವುಗಳ ಮೇಲಾಗಲಿ ಭರವಸೆ ಇಡುವು
ದಿಲ್ಲ. 4ನಾನು ನನ್ನ ಮೇಲೆ ಭರವಸೆ ಇಡಬಲ್ಲವನಾಗಿದ್ದರೂ
ಇಡುವುದಿಲ್ಲ. ತನ್ನ ಮೇಲೆ ಭರವಸೆ ಇಡಲು ತನಗೆ ಆಧಾರ
ವಿರುವುದಾಗಿ ಯಾವನಾದರೂ ಯೋಚಿಸಿದರೆ, ನನ್ನ ಮೇಲೆ
ಭರವಸೆ ಇಡಲು ನನಗೆ ಅದಕ್ಕಿಂತಲೂ ಹೆಚ್ಚಿನ ಆಧಾರವಿದೆ.
5ಹುಟ್ಟಿದ ಎಂಟನೆಯ ದಿನದಲ್ಲಿ ನನಗೆ ಸುನ್ನತಿಯಾಯಿತು.
ನಾನು ಇಸ್ರೇಲ್ ವಂಶದವನು ಮತ್ತು ಬೆನ್ಯಾಮೀನನ ಕುಲ
ದವನು. ನಾನು ಇಬ್ರಿಯನು ಮತ್ತು ನನ್ನ ತಂದೆತಾಯಿಗಳು ಸಹ
ಇಬ್ರಿಯರು. ನಾನು ಮೋಶೆಯ ಧರ್ಮಶಾಸ್ತ್ರವನ್ನು ಮುಖ್ಯ
ವಾದದ್ದೆಂದು ಪರಿಗಣಿಸಿ ಫರಿಸಾಯನಾದೆನು; 6ಯೆಹೂದ್ಯ
ಧರ್ಮದಲ್ಲಿ ಬಹಳ ಆಸಕ್ತಿಯುಳ್ಳವನಾಗಿದ್ದು ಕ್ರೈಸ್ತಸಭೆಯನ್ನು
(ವಿಶ್ವಾಸಿಗಳನ್ನು) ಹಿಂಸಿಸಿದೆನು. ಮೋಶೆಯ ಧರ್ಮಶಾಸ್ತ್ರಕ್ಕೆ
ಯಾವಾಗಲೂ ವಿಧೇಯನಾಗಿದ್ದುದರಿಂದ ಯಾರೂ ನನ್ನ
ವಿಷಯದಲ್ಲಿ ತಪ್ಪನ್ನು ಕಂಡುಹಿಡಿಯಲಾಗಲಿಲ್ಲ. 7ಒಂದು
ಕಾಲದಲ್ಲಿ ಇವುಗಳೆಲ್ಲ ನನಗೆ ಮುಖ್ಯವಾಗಿದ್ದವು. ಆದರೆ ಈಗ
ಅವುಗಳೆಲ್ಲ ಕ್ರಿಸ್ತನ ದೆಸೆಯಿಂದ ನಿಷ್ಪ್ರಯೋಜಕವಾಗಿವೆ. 8ಅಷ್ಟೇ
ಅಲ್ಲ, ನನ್ನ ಪ್ರಭುವಾದ ಯೇಸು ಕ್ರಿಸ್ತನನ್ನು ತಿಳಿದುಕೊಳ್ಳುವುದೇ
ಎಲ್ಲಾ ಸಂಗತಿಗಳಿಗಿಂತಲೂ ಅತಿಶ್ರೇಷ್ಠವಾದದ್ದೆಂದು ನನಗೆ
ಮನದಟ್ಟಾಗಿದೆ. ನಾನು ಯಾವುದನ್ನು ಮುಖ್ಯವಾದವುಗಳೆಂದು
ಪರಿಗಣಿಸಿದ್ದೆನೊ ಅವುಗಳನ್ನೆಲ್ಲ ಕ್ರಿಸ್ತನ ನಿಮಿತ್ತ ಕಳೆದು
ಕೊಂಡೆನು. ಅವುಗಳೆಲ್ಲ ನಿಷ್ಪ್ರಯೋಜಕವಾದವುಗಳೆಂದು ನನಗೆ
ತಿಳಿದಿದೆ. 9ನಾನು ಕ್ರಿಸ್ತನನ್ನು ಹೊಂದಿಕೊಳ್ಳಲು ಮತ್ತು ಕ್ರಿಸ್ತ
ನಲ್ಲಿರಲು ಇದು ನನಗೆ ಅವಕಾಶ ಮಾಡಿಕೊಡುತ್ತದೆ. ನಾನು
ಕ್ರಿಸ್ತನ ಮೂಲಕ ನೀತಿವಂತನಾಗಿದ್ದೇನೆ. ಈ ನೀತಿಯು, ಧರ್ಮ
ಶಾಸ್ತ್ರವನ್ನು ಅನುಸರಿಸಿದ ಮಾತ್ರಕ್ಕೆ ದೊರೆಯುವುದಿಲ್ಲ. ಇದು
ನಂಬಿಕೆಯ ಮೂಲಕ ದೇವರಿಂದ ಬರುತ್ತದೆ. ಕ್ರಿಸ್ತನಲ್ಲಿ ನನ
ಗಿರುವ ನಂಬಿಕೆಯ ಮೂಲಕ ದೇವರು ನನ್ನನ್ನು ನೀತಿವಂತ
ನನ್ನಾಗಿ ಮಾಡಿದನು. 10ಕ್ರಿಸ್ತನನ್ನೂ ಪುನರುತ್ಥಾನದ ಶಕ್ತಿ
ಯನ್ನೂ ತಿಳಿದುಕೊಂಡು ಆತನ ಸಂಕಟದಲ್ಲಿ ಪಾಲುಗಾರನಾಗಿ
ಆತನ ಮರಣದಲ್ಲಿ ಆತನಂತಾಗಬೇಕೆಂಬುದೇ ನನ್ನ ಅಪೇಕ್ಷೆ.
11ಹೀಗಾದರೆ, ನಾನು ಸತ್ತವರೊಳಗಿಂದ ಎಬ್ಬಿಸಲ್ಪಡುತ್ತೇನೆ
ಎಂಬ ನಿರೀಕ್ಷೆ ನನಗಿದೆ.

### ಗುರಿಮುಟ್ಟಲು ಪ್ರಯತ್ನ

12ಈಗಾಗಲೇ ನಾನು ಇದೆಲ್ಲವನ್ನು ಸಾಧಿಸಿ ಪರಿಪೂರ್ಣತೆ
ಯನ್ನು ಗಳಿಸಿದ್ದೇನೆ ಎಂದು ಹೇಳುತ್ತಿಲ್ಲ. ನಾನು ಆ ಗುರಿಯನ್ನು
ಇನ್ನೂ ಮುಟ್ಟಿಲ್ಲ. ಆದರೆ ಆ ಗುರಿಯನ್ನು ಮುಟ್ಟಿ ಅದನ್ನು ನನ್ನ
ದಾಗಿಸಿಕೊಳ್ಳಲು ಪ್ರಯತ್ನಿಸುತ್ತಿದ್ದೇನೆ. ಇದು ಕ್ರಿಸ್ತನ ಅಪೇಕ್ಷೆ.
ಆದಕಾರಣವೇ, ಕ್ರಿಸ್ತನು ನನ್ನನ್ನು ತನ್ನವನನ್ನಾಗಿ ಮಾಡಿ
ಕೊಂಡನು. 13ಸಹೋದರ ಸಹೋದರಿಯರೇ, ನಾನಿನ್ನೂ ಆ
ಗುರಿಯನ್ನು ಮುಟ್ಟಿಲ್ಲವೆಂಬುದು ನನಗೆ ಗೊತ್ತಿದೆ. ಆದರೆ ನಾನು
ಯಾವಾಗಲೂ ಹಿಂದಿನ ಸಂಗತಿಗಳನ್ನು ಮರೆತುಬಿಟ್ಟು ನನ್ನ
ಮುಂದಿರುವ ಗುರಿಯನ್ನು ಮುಟ್ಟಲು ನನ್ನಿಂದಾದಷ್ಟರ ಮಟ್ಟಿಗೆ
ಓಡುತ್ತಿದ್ದೇನೆ. 14ದೇವರು ನಮ್ಮನ್ನು ಕ್ರಿಸ್ತನ ಮೂಲಕ
ಮೇಲೋಕದ ಜೀವಿತಕ್ಕೆ ಕರೆದು ನಮ್ಮ ಮುಂದೆ ಇಟ್ಟಿರುವ
ಬಹುಮಾನವನ್ನು ಗುರಿಮಾಡಿಕೊಂಡು ಓಡುತ್ತಾ ಇದ್ದೇನೆ.

15ಆತ್ಮಿಕತೆಯಲ್ಲಿ ಪರಿಪೂರ್ಣವಾದ ಮಟ್ಟಕ್ಕೆ ಬಂದಿರುವ
ನಾವೆಲ್ಲರೂ ಇದೇ ರೀತಿ ಯೋಚಿಸಬೇಕು. ನೀವು ಈ ಸಂಗತಿ
ಗಳಲ್ಲಿ ಯಾವುದನ್ನಾದರೂ ಒಪ್ಪಿಕೊಳ್ಳದಿದ್ದರೆ ದೇವರೇ ನಿಮಗೆ
ಅದನ್ನು ಸ್ಪಷ್ಟಪಡಿಸುವನು. 16ಆದರೆ ನಾವು ಈಗಾಗಲೇ
ಹೊಂದಿರುವ ಸತ್ಯವನ್ನು ಅನುಸರಿಸುತ್ತಾ ನಡೆಯೋಣ.
17ಸಹೋದರ ಸಹೋದರಿಯರೇ, ನೀವೆಲ್ಲರೂ ನನ್ನಂತೆ

---

**ನಾವಾದರೋ … ಆರಾಧಿಸುವವರಾಗಿದ್ದೇವೆ** ಅಂದರೆ, ದೇವರನ್ನು ಆತ್ಮದಿಂದ ಆರಾಧಿಸುವುದು.

ಜೀವಿಸಲು ಪ್ರಯತ್ನಿಸಿ. ನಾವು ನಿಮಗೆ ತೋರಿಸಿದ ಮಾದರಿಯ
ಪ್ರಕಾರ ಜೀವಿಸುವವರನ್ನು ಅನುಸರಿಸಿರಿ. 18ಅನೇಕರು ಕ್ರಿಸ್ತನ
ಶಿಲುಬೆಗೆ ವೈರಿಗಳೊ ಎಂಬಂತೆ ಜೀವಿಸುತ್ತಾರೆ. ಅವರ ಬಗ್ಗೆ
ನಾನು ನಿಮಗೆ ಅನೇಕ ಸಲ ತಿಳಿಸಿದ್ದೇನೆ, ಈಗಲೂ ಕಣ್ಣೀರಿನಿಂದ
ಹೇಳುತ್ತೇನೆ. 19ಅವರ ನಡತೆಯು ಅವರನ್ನು ನಾಶದೆಡೆಗೆ
ನಡೆಸುತ್ತಿದೆ. ಅವರು ದೇವರ ಸೇವೆ ಮಾಡುತ್ತಿಲ್ಲ. ಆ ಜನರು
ಕೇವಲ ತಮ್ಮ ಸಂತೋಷಕ್ಕಾಗಿ ಜೀವಿಸುತ್ತಿದ್ದಾರೆ. ಅವರು
ನಾಚಿಕೆಕರವಾದ ಕೆಲಸಗಳನ್ನು ಮಾಡಿ, ಅವುಗಳ ಬಗ್ಗೆ
ಹೆಮ್ಮೆಪಡುತ್ತಾರೆ. ಅವರು ಕೇವಲ ಈ ಲೋಕದ ವಿಷಯಗಳ
ಬಗ್ಗೆ ಆಲೋಚಿಸುತ್ತಾರೆ. 20ನಾವಾದರೊ ಪರಲೋಕ ಸಂಸ್ಥಾನ
ದವರು. ನಮ್ಮ ರಕ್ಷಕನು ಅಲ್ಲಿಂದಲೇ ಬರುವುದನ್ನು ನಾವು
ಎದುರುನೋಡುತ್ತಿದ್ದೇವೆ. ಪ್ರಭುವಾದ ಯೇಸು ಕ್ರಿಸ್ತನೇ ನಮ್ಮ
ರಕ್ಷಕನು. 21ಆತನು ತನ್ನ ಶಕ್ತಿಯಿಂದ ಸಮಸ್ತವನ್ನು ಆಳುತ್ತಾನೆ
ಮತ್ತು ನಮ್ಮ ದೀನಾವಸ್ಥೆಯ ಈ ಶರೀರವನ್ನು ರೂಪಾಂತರ
ಪಡಿಸಿ ತನ್ನ ಸ್ವಂತ ಮಹಿಮಾಶರೀರದಂತೆ ಮಾಡುತ್ತಾನೆ.

### ಮಾಡಬೇಕಾದ ಕಾರ್ಯಗಳು

4 ನನ್ನ ಸಹೋದರ ಸಹೋದರಿಯರೇ, ನಾನು ನಿಮ್ಮನ್ನು
ಪ್ರೀತಿಸುತ್ತೇನೆ ಮತ್ತು ನಿಮ್ಮನ್ನು ನೋಡಬಯಸುತ್ತೇನೆ.
ನೀವು ನನಗೆ ಆನಂದವನ್ನು ಉಂಟುಮಾಡಿ, ನಿಮ್ಮ ವಿಷಯದಲ್ಲಿ
ನಾನು ಹೆಮ್ಮೆಪಡುವಂತೆ ಮಾಡಿದ್ದೀರಿ. ನಾನು ನಿಮಗೆ
ಹೇಳಿದಂತೆ ಪ್ರಭುವನ್ನು ಅನುಸರಿಸಿರಿ.

2ಪ್ರಭುವಿನಲ್ಲಿ ಒಂದೇ ಮನಸ್ಸನ್ನು ಹೊಂದಿರಬೇಕೆಂದು
ನಾನು ಯುವೊದ್ಯಳನ್ನೂ ಸಂತುಕೆಯನ್ನೂ ಕೇಳಿಕೊಳ್ಳುತ್ತೇನೆ.
3ನನ್ನ ಸ್ನೇಹಿತನೇ, ನೀನು ನನ್ನ ಜೊತೆಕೆಲಸದವನಾಗಿ ನಂಬಿ
ಗಸ್ತಿಕೆಯಿಂದ ಸೇವೆ ಮಾಡುತ್ತಿರುವುದರಿಂದ ಈ ಸ್ತ್ರೀಯರಿಗೂ
ನೀನು ಸಹಾಯ ಮಾಡಬೇಕೆಂದು ನಿನ್ನನ್ನು ಕೇಳಿಕೊಳ್ಳುತ್ತೇನೆ.
ಈ ಸ್ತ್ರೀಯರು ನನ್ನೊಂದಿಗೆ ಸುವಾರ್ತೆಗೋಸ್ಕರ ಸೇವೆ
ಮಾಡಿದ್ದಾರೆ. ನನ್ನೊಂದಿಗೆ ಸೇವೆ ಮಾಡುತ್ತಿದ್ದ ಕ್ಲೇಮೆನ್ಸ್ ಮತ್ತು
ಇತರ ಸೇವಕರೊಡನೆ ಈ ಸ್ತ್ರೀಯರು ಸೇವೆ ಮಾಡಿದ್ದಾರೆ. ಅವರ
ಹೆಸರುಗಳು ಜೀವಬಾಧ್ಯರ ಪುಸ್ತಕದಲ್ಲಿ* ಬರೆಯಲ್ಪಟ್ಟಿವೆ.

4ಯಾವಾಗಲೂ ಪ್ರಭುವಿನಲ್ಲಿ ಆನಂದಿಸಿರಿ; ಆನಂದಪಡಿರಿ
ಎಂದು ಮತ್ತೆ ಹೇಳುತ್ತೇನೆ.

5ನಿಮ್ಮ ಮೃದು ಸ್ವಭಾವವನ್ನೂ ಕರುಣೆಯನ್ನೂ ಜನರೆಲ್ಲರೂ
ನೋಡುವಂತಾಗಲಿ. ಪ್ರಭುವು ಬೇಗನೆ ಬರುತ್ತಾನೆ.
6ಯಾವುದರ ಬಗ್ಗೆಯೂ ಚಿಂತಿಸಬೇಡಿ. ಆದರೆ ಪ್ರಾರ್ಥನೆ
ಮಾಡುತ್ತಾ ನಿಮ್ಮ ಅಗತ್ಯತೆಗಳಿಗೆಲ್ಲ ದೇವರಲ್ಲಿ ವಿಜ್ಞಾಪಿಸಿರಿ.
ನೀವು ಪ್ರಾರ್ಥನೆ ಮಾಡುವಾಗಲೆಲ್ಲಾ ದೇವರಿಗೆ ಕೃತಜ್ಞತಾಸ್ತುತಿ
ಮಾಡಿರಿ. 7ದೇವಶಾಂತಿಯು ಕ್ರಿಸ್ತ ಯೇಸುವಿನಲ್ಲಿ ನಿಮ್ಮ
ಹೃದಯಗಳನ್ನೂ ಮನಸ್ಸುಗಳನ್ನೂ ಕಾಯುವುದು. ದೇವರು
ಕೊಡುವ ಆ ಶಾಂತಿಯು ನಾವು ಅರ್ಥಮಾಡಿಕೊಳ್ಳಲಾಗದಷ್ಟು
ಅಗಮ್ಯವಾಗಿದೆ.

8ಸಹೋದರ ಸಹೋದರಿಯರೇ, ಒಳ್ಳೆಯದಾದ ಮತ್ತು
ಸ್ತುತಿಗೆ ಯೋಗ್ಯವಾದ ಸಂಗತಿಗಳ ಬಗ್ಗೆ ಆಲೋಚಿಸಿರಿ. ಸತ್ಯ
ವಾದ, ಮಾನ್ಯವಾದ, ನ್ಯಾಯವಾದ, ಶುದ್ಧವಾದ, ಸುಂದರವಾದ
ಮತ್ತು ಗೌರವಯುತವಾದ ವಿಷಯಗಳ ಬಗ್ಗೆ ಆಲೋಚಿಸಿರಿ.
9ನೀವು ನನ್ನಿಂದ ಕಲಿತುಕೊಂಡದ್ದನ್ನು, ಹೊಂದಿಕೊಂಡದ್ದನ್ನು,
ಕೇಳಿದ್ದನ್ನು ಮತ್ತು ಕಣ್ಣಾರೆ ಕಂಡದ್ದನ್ನು ಮಾಡಿರಿ. ಆಗ,
ಶಾಂತಿಯನ್ನು ಕೊಡುವ ದೇವರು ನಿಮ್ಮೊಂದಿಗಿರುವನು.

### ಫಿಲಿಪ್ಪಿ ಕ್ರೈಸ್ತರಿಗೆ ಪೌಲನ ವಂದನೆ

10ನನ್ನ ಮೇಲೆ ನಿಮಗಿರುವ ಚಿಂತೆಯನ್ನು ನೀವು ಮತ್ತೆ
ತೋರಿಸಿದ್ದಕ್ಕಾಗಿ ನಾನು ಪ್ರಭುವಿನಲ್ಲಿ ಬಹು ಸಂತೋಷಪಡು
ತ್ತೇನೆ. ನೀವು ನನ್ನ ಬಗ್ಗೆ ಚಿಂತಿಸುತ್ತಲೇ ಇದ್ದೀರಿ. ಆದರೆ ಅದನ್ನು
ತೋರಿಸಲು ನಿಮಗೆ ಅವಕಾಶವೇ ಇರಲಿಲ್ಲ. 11ನಾನು ಈ
ಮಾತುಗಳನ್ನು ಹೇಳುತ್ತಿರುವುದು ನನಗಿರುವ ಕೊರತೆಯ
ದೆಸೆಯಿಂದಲ್ಲ. ನನ್ನಲ್ಲಿರುವಂಥವುಗಳಲ್ಲಿ ಮತ್ತು ನನಗೆ ಸಂಭವಿ
ಸುವ ಪ್ರತಿಯೊಂದರಲ್ಲಿ ತೃಪ್ತನಾಗಿರಲು ನಾನು ಕಲಿತುಕೊಂಡಿ
ದ್ದೇನೆ. 12ಹಸಿವೆಯಿಂದಿರುವಾಗಲೂ ಸಮೃದ್ಧಿಯುಳ್ಳವನಾಗಿರು
ವಾಗಲೂ ಹೇಗೆ ಜೀವಿಸಬೇಕೆಂಬುದು ನನಗೆ ತಿಳಿದಿದೆ. ಯಾವ
ಸಮಯದಲ್ಲಾಗಲಿ ಯಾವ ಪರಿಸ್ಥಿತಿಯಲ್ಲಾಗಲಿ ಸಂತೋಷ
ದಿಂದಿರುವ ಗುಟ್ಟು ನನಗೆ ತಿಳಿದಿದೆ. ಊಟಕ್ಕೆ ಬೇಕಾದಷ್ಟು
ಇರುವಾಗಲೂ ಇಲ್ಲದಿರುವಾಗಲೂ ನನಗೆ ಅಗತ್ಯವಾದುವು
ಗಳನ್ನು ಹೊಂದಿರುವಾಗಲೂ ಹೊಂದಿಲ್ಲದಿರುವಾಗಲೂ
ಸಂತೋಷವಾಗಿರಲು ಕಲಿತುಕೊಂಡಿದ್ದೇನೆ. 13ಕ್ರಿಸ್ತನ ಮೂಲಕ
ನಾನು ಎಲ್ಲಾ ಕಾರ್ಯಗಳನ್ನು ಮಾಡಬಲ್ಲೆನು. ಏಕೆಂದರೆ ಆತನು
ನನ್ನನ್ನು ಬಲಪಡಿಸುತ್ತಾನೆ. 14ಆದರೂ ನಾನು ಕೊರತೆಯಲ್ಲಿ
ದ್ದಾಗ ನೀವು ನನಗೆ ಸಹಾಯ ಮಾಡಿದ್ದು ಒಳ್ಳೆಯದಾಯಿತು.
15ಇದಲ್ಲದೆ ಫಿಲಿಪ್ಪಿ ಪಟ್ಟಣದವರೇ, ನಾನು ಮೊದಲು ನಿಮ್ಮಲ್ಲಿ
ಸುವಾರ್ತೆಯನ್ನು ಸಾರಿ ಮಕೆದೋನಿಯಕ್ಕೆ ಹೊರಟಾಗ, ನಿಮ್ಮ
ಸಭೆಯೊಂದೇ ನನಗೆ ಸಹಾಯ ಮಾಡಿದ್ದು ನಿಮಗೆ ಗೊತ್ತಿದೆ.
16ನಾನು ಥೆಸಲೋನಿಕದಲ್ಲಿದ್ದಾಗ ನನಗೆ ಅಗತ್ಯವಾದವುಗಳನ್ನು
ನೀವು ಹಲವಾರು ಸಲ ಕಳುಹಿಸಿಕೊಟ್ಟಿರಿ. 17ನಿಜವಾಗಿಯೂ,
ನಿಮ್ಮಿಂದ ಕೊಡುಗೆಗಳನ್ನು ಪಡೆದುಕೊಳ್ಳಬೇಕೆಂಬುದು ನನ್ನ
ಅಪೇಕ್ಷೆಯಲ್ಲ. ಆದರೆ ಕೊಡುವುದರ ಮೂಲಕ ಮುಂದೆ
ಹೇರಳವಾಗಿ ದೊರೆಯುವ ಆಶೀರ್ವಾದಗಳನ್ನು ನೀವು ಹೊಂದಿ
ಕೊಳ್ಳಬೇಕೆಂಬುದೇ ನನ್ನ ಅಪೇಕ್ಷೆ. 18ಎಪಫ್ರೊದೀತನು ನಿಮ್ಮ
ಕೊಡುಗೆಯನ್ನು ತಂದು ಕೊಟ್ಟಿದ್ದರಿಂದ ಬೇಕಾದದ್ದೆಲ್ಲ ನನ್ನಲ್ಲಿ
ಹೇರಳವಾಗಿದೆ. ನಿಮ್ಮ ಕೊಡುಗೆಯು ದೇವರಿಗೆ ಅರ್ಪಿಸಲ್ಪಟ್ಟ
ಪರಿಮಳಭರಿತವಾದ ಯಜ್ಞವಾಗಿದೆ. ಇದು ದೇವರಿಗೆ ಮೆಚ್ಚಿಕೆ
ಯಾದದ್ದೂ ಆಗಿದೆ. 19ನನ್ನ ದೇವರು ಕ್ರಿಸ್ತ ಯೇಸುವಿನ
ಮೂಲಕ ತನ್ನ ಪ್ರಭಾವದ ಐಶ್ವರ್ಯಕ್ಕೆ ಅನುಗುಣವಾಗಿ ನಿಮ್ಮ
ಪ್ರತಿಯೊಂದು ಕೊರತೆಯನ್ನು ನೀಗಿಸುವನು. 20ನಮ್ಮ ತಂದೆ
ಯಾದ ದೇವರಿಗೆ ಸದಾಕಾಲ ಮಹಿಮೆಯಾಗಲಿ. ಆಮೆನ್.

21ಕ್ರಿಸ್ತ ಯೇಸುವಿನಲ್ಲಿ ದೇವಜನರೆಲ್ಲರಿಗೂ ವಂದನೆ ತಿಳಿಸಿ.
ನನ್ನೊಂದಿಗಿರುವ ಸಹೋದರರು ನಿಮಗೆ ವಂದನೆ ತಿಳಿಸಿದ್ದಾರೆ.
22ಎಲ್ಲಾ ದೇವಮಕ್ಕಳು ನಿಮಗೆ ವಂದನೆ ತಿಳಿಸಿದ್ದಾರೆ. ಸೀಸರನ
ಅರಮನೆಯಲ್ಲಿರುವ ವಿಶ್ವಾಸಿಗಳೂ ಸಹ ನಿಮಗೆ ವಂದನೆ
ತಿಳಿಸಿದ್ದಾರೆ. 23ಪ್ರಭು ಯೇಸು ಕ್ರಿಸ್ತನ ಕೃಪೆಯು ನಿಮ್ಮೆಲ್ಲ
ರೊಂದಿಗಿರಲಿ.

---

**ಜೀವಬಾಧ್ಯರ ಪುಸ್ತಕ** ಆಯ್ಕೆಗೊಂಡ ದೇವಮಕ್ಕಳೆಲ್ಲರ ಹೆಸರನ್ನು ಹೊಂದಿರುವ ದೇವರ ಪುಸ್ತಕ. (ಪ್ರಕಟನೆ 3:5;21:27).

# ಕೊಲೊಸ್ಸೆಯವರಿಗೆ ಬರೆದ ಪತ್ರ

1 ದೇವರ ಚಿತ್ತಾನುಸಾರ ಕ್ರಿಸ್ತಯೇಸುವಿನ ಅಪೊಸ್ತಲನಾದ
ಪೌಲನು ಬರೆಯುವ ಪತ್ರ. 2ಕೊಲೊಸ್ಸೆಯಲ್ಲಿರುವ
ದೇವಜನರಿಗೆ ಅಂದರೆ ಕ್ರಿಸ್ತನಲ್ಲಿ ನಂಬಿಗಸ್ತರಾದ ಮತ್ತು
ಪವಿತ್ರರಾದ ಸಹೋದರರ, ಸಹೋದರಿಯರಿಗೆ ನಾನು ಈ
ಪತ್ರವನ್ನು ನಮ್ಮ ಸಹೋದರನಾದ ತಿಮೊಥೆಯನ ಜೊತೆಗೂಡಿ
ಬರೆಯುತ್ತಿದ್ದೇನೆ. ನಮ್ಮ ತಂದೆಯಾದ ದೇವರಿಂದ ನಿಮಗೆ
ಕೃಪೆಯೂ ಶಾಂತಿಯೂ ದೊರಕಲಿ. 3ನಾವು ಪ್ರಾರ್ಥಿಸುವಾಗ
ಲೆಲ್ಲಾ ನಿಮ್ಮ ವಿಷಯದಲ್ಲಿ ದೇವರಿಗೆ ಸ್ತೋತ್ರ ಸಲ್ಲಿಸುತ್ತೇವೆ.
ನಮ್ಮ ಪ್ರಭುವಾದ ಯೇಸು ಕ್ರಿಸ್ತನ ತಂದೆಯೇ ದೇವರು. 4ನಾವು
ದೇವರಿಗೆ ಸ್ತೋತ್ರ ಮಾಡಲು ಕಾರಣವೇನೆಂದರೆ ಕ್ರಿಸ್ತ ಯೇಸು
ವಿನಲ್ಲಿ ನಿಮಗಿರುವ ನಂಬಿಕೆಯ ಬಗ್ಗೆ, ದೇವಜನರೆಲ್ಲರ ಮೇಲೆ
ನಿಮಗಿರುವ ಪ್ರೀತಿಯ ಬಗ್ಗೆ ಕೇಳಿದ್ದೇವೆ. 5-6ನಿಮಗೆ ನಿರೀಕ್ಷೆ
ಇರುವುದರಿಂದಲೇ ಕ್ರಿಸ್ತನಲ್ಲಿ ನಂಬಿಕೆ ಇಟ್ಟಿದ್ದೀರಿ ಮತ್ತು
ದೇವಜನರನ್ನು ಪ್ರೀತಿಸುತ್ತೀರಿ. ನೀವು ನಿರೀಕ್ಷಿಸುವಂಥವುಗಳು
ನಿಮಗೋಸ್ಕರ ಪರಲೋಕದಲ್ಲಿ ಸಿದ್ಧಮಾಡಲ್ಪಟ್ಟಿವೆ ಎಂಬುದು
ನಿಮಗೆ ತಿಳಿದಿದೆ. ನಿಮಗೆ ತಿಳಿಸಲಾದ ಸತ್ಯವಾಕ್ಯವನ್ನು ಅಂದರೆ
ಸುವಾರ್ತೆಯನ್ನು ನೀವು ಕೇಳಿದಾಗ ಈ ನಿರೀಕ್ಷೆಯ ಬಗ್ಗೆ ತಿಳಿದು
ಕೊಂಡಿರಿ. ಸುವಾರ್ತೆಯು ಪ್ರಪಂಚದ ಎಲ್ಲಾ ಕಡೆಗಳಲ್ಲೂ ವೃದ್ಧಿ
ಯಾಗುತ್ತಿದೆ ಮತ್ತು ಆಶೀರ್ವಾದಕರವಾಗಿದೆ. ನೀವು ಸುವಾರ್ತೆ
ಯನ್ನು ಕೇಳಿ ದೇವರ ಕೃಪೆಯ ಸತ್ಯಾರ್ಥವನ್ನು ತಿಳಿದು
ಕೊಂಡಂದಿನಿಂದ ಸುವಾರ್ತೆಯು ನಿಮ್ಮಲ್ಲಿ ವೃದ್ಧಿಯಾಗುತ್ತಿದೆ
ಮತ್ತು ಜನರಿಗೆ ಆಶೀರ್ವಾದಕರವಾಗಿದೆ. 7ನೀವು ಎಪಫ್ರನಿಂದ
ದೇವರ ಕೃಪೆಯ ಬಗ್ಗೆ ತಿಳಿದುಕೊಂಡಿರಿ. ಅವನು ನಮ್ಮ ಜೊತೆ
ಯಲ್ಲಿಯೇ ಸೇವೆ ಮಾಡುತ್ತಿದ್ದಾನೆ. ನಾವು ಅವನನ್ನು ಪ್ರೀತಿಸು
ತ್ತೇವೆ. ಅವನು ನಮಗೋಸ್ಕರ ಕ್ರಿಸ್ತನ ನಂಬಿಗಸ್ತ ಸೇವಕ
ನಾಗಿದ್ದಾನೆ. 8ಪವಿತ್ರಾತ್ಮ ಪ್ರೇರಿತವಾದ ನಿಮ್ಮ ಪ್ರೀತಿಯ ಬಗ್ಗೆ
ಎಪಫ್ರನು ಸಹ ನಮಗೆ ತಿಳಿಸಿದನು.
9ನಿಮ್ಮ ಬಗ್ಗೆ ಈ ಸಂಗತಿಗಳನ್ನು ಕೇಳಿದ ದಿನದಿಂದ, ನಿಮ
ಗೋಸ್ಕರ ಎಡಬಿಡದೆ ಪ್ರಾರ್ಥಿಸುತ್ತಿದ್ದೇವೆ.

ದೇವರು ಅಪೇಕ್ಷಿಸುವ ಸಂಗತಿಗಳೆಲ್ಲವನ್ನು ನೀವು
ಪೂರ್ಣವಾಗಿ ತಿಳಿದುಕೊಳ್ಳಬೇಕೆಂತಲೂ ಆತ್ಮಿಕ
ಸಂಗತಿಗಳಲ್ಲಿ ಮಹಾಜ್ಞಾನವನ್ನು ಮತ್ತು ತಿಳು
ವಳಿಕೆಯನ್ನು ಹೊಂದಿಕೊಳ್ಳಬೇಕೆಂತಲೂ,
10 ಪ್ರಭುವಿಗೆ ಯೋಗ್ಯರಾಗಿ ನಡೆದು ಪ್ರತಿಯೊಂದು
ವಿಷಯದಲ್ಲಿ ಆತನನ್ನು ಸಂತೋಷಪಡಿಸ
ಬೇಕೆಂತಲೂ ನೀವು ಎಲ್ಲಾ ವಿಧವಾದ ಒಳ್ಳೆಯ
ಕಾರ್ಯಗಳನ್ನು ಮಾಡುತ್ತಾ ದೇವಜ್ಞಾನದಲ್ಲಿ
ಬೆಳೆಯಬೇಕೆಂತಲೂ
11 ಆತನ ಮಹಿಮಾಶಕ್ತಿಯಿಂದ ಪರಿಪೂರ್ಣ ಬಲ
ಹೊಂದಿ ಆನಂದಪೂರ್ವಕವಾದ ತಾಳ್ಮೆಯನ್ನು,
ದೀರ್ಘಶಾಂತಿಯನ್ನು ಯಾವಾಗಲೂ ತೋರಿಸು
ವವರಾಗಿರಬೇಕೆಂತಲೂ ನಾವು ಪ್ರಾರ್ಥಿಸು
ತ್ತಿದ್ದೇವೆ.

12ಆಗ ನೀವು ಆನಂದದಿಂದ ತಂದೆಗೆ ಕೃತಜ್ಞತಾಸ್ತುತಿ
ಮಾಡಬಲ್ಲಿರಿ. ಬೆಳಕಿನಲ್ಲಿ ವಾಸಿಸುವ ತನ್ನ ಜನರೆಲ್ಲರಿಗೂ
ಆತನು ಸಿದ್ಧಪಡಿಸಿರುವಂಥವುಗಳನ್ನು ಹೊಂದಿಕೊಳ್ಳಲು ಆತನೇ
ನಿಮ್ಮನ್ನು ಯೋಗ್ಯರನ್ನಾಗಿ ಮಾಡಿದನು. 13ದೇವರು ನಮ್ಮನ್ನು
ಅಂಧಕಾರದ ಶಕ್ತಿಯಿಂದ ಬಿಡುಗಡೆ ಮಾಡಿದ್ದಾನೆ. ಆತನು
ನಮ್ಮನ್ನು ತನ್ನ ಪ್ರಿಯ ಮಗನ (ಯೇಸುವಿನ) ರಾಜ್ಯದೊಳಗೆ
ಸೇರಿಸಿದ್ದಾನೆ. 14ಮಗನು ನಮ್ಮ ಪಾಪಗಳಿಗೆ ಪರಿಹಾರ ನೀಡಿ
ದನು. ಆತನಲ್ಲಿಯೇ ನಮ್ಮ ಪಾಪಗಳಿಗೆ ಕ್ಷಮೆ ದೊರೆಯಿತು.

### ನಾವು ಕ್ರಿಸ್ತನ ಕಡೆಗೆ ನೋಡುವಾಗ ದೇವರನ್ನೇ ಕಾಣುತ್ತೇವೆ

15ದೇವರನ್ನು ನೋಡಲು ಯಾವ ವ್ಯಕ್ತಿಗೂ ಸಾಧ್ಯವಿಲ್ಲ.
ಆದರೆ ಯೇಸುವು ದೇವರ ಪ್ರತಿರೂಪಿಯಾಗಿದ್ದಾನೆ. ಸೃಷ್ಟಿಸಲ್ಪಟ್ಟ
ವುಗಳಿಗೆಲ್ಲಾ ಯೇಸು ಅಧಿಪತಿಯಾಗಿದ್ದಾನೆ. 16ಭೂಲೋಕ
ಮತ್ತು ಪರಲೋಕಗಳಲ್ಲಿರುವ ಎಲ್ಲವುಗಳು, ದೃಶ್ಯ ಮತ್ತು
ಅದೃಶ್ಯವಾದವುಗಳು, ಆತ್ಮಿಕ ಶಕ್ತಿಗಳು, ಪ್ರಭುತ್ವಗಳು ಆತನ
ಶಕ್ತಿಯಿಂದ ನಿರ್ಮಿತವಾಗಿವೆ. ಅಧಿಪತಿಗಳು ಮತ್ತು ಅಧಿಕಾರಿ
ಗಳು ಆತನ ಶಕ್ತಿಯಿಂದ ನಿರ್ಮಿತರಾದರು. ಸಮಸ್ತವು ಕ್ರಿಸ್ತನ
ಮೂಲಕವಾಗಿ ಆತನಿಗೋಸ್ಕರ ಸೃಷ್ಟಿಸಲ್ಪಟ್ಟವು. 17ಅವುಗಳಿ
ಗಿಂತ ಮೊದಲೇ ಕ್ರಿಸ್ತನಿದ್ದನು. ಸಮಸ್ತಕ್ಕೂ ಆತನೇ ಆಧಾರ
ಭೂತನಾಗಿದ್ದಾನೆ. 18ಕ್ರಿಸ್ತನು ದೇಹಕ್ಕೆ (ಸಭೆಯ) ಶಿರಸ್ಸಾಗಿ
ದ್ದಾನೆ. ಪ್ರತಿಯೊಂದೂ ಆತನಿಂದಲೇ ಬರುತ್ತದೆ. ಮರಣದಿಂದ
ಎದ್ದುಬಂದ ಆತನೇ ಚೊಚ್ಚಲ ಮಗನು. ಆದ್ದರಿಂದ ಎಲ್ಲಾ
ದರಲ್ಲಿಯೂ ಯೇಸುವೇ ಅತ್ಯಂತ ಪ್ರಾಮುಖ್ಯನಾಗಿದ್ದಾನೆ.
19ಆತನಲ್ಲಿ ತನ್ನ ಸರ್ವಸಂಪೂರ್ಣತೆಯು ನೆಲಸಿರ
ಬೇಕೆಂಬುದೂ, 20ಆತನು ಶಿಲುಬೆಯ ಮೇಲೆ ಸುರಿಸಿದ ರಕ್ತ
ದಿಂದ ಸಮಾಧಾನವನ್ನು ಉಂಟುಮಾಡಿ ಭೂಪರಲೋಕಗಳಲ್ಲಿ
ರುವ ಸಮಸ್ತವನ್ನು ತನಗೆ ಸಂಧಾನಪಡಿಸಿಕೊಳ್ಳಬೇಕೆಂಬುದೂ
ದೇವರ ಚಿತ್ತವಾಗಿತ್ತು.
21ಒಂದು ಕಾಲದಲ್ಲಿ ನೀವು ದೇವರಿಂದ ಬೇರ್ಪಟ್ಟಿದ್ದಿರಿ,
ದುಷ್ಕೃತ್ಯಗಳನ್ನು ಮಾಡುತ್ತಾ ನಿಮ್ಮ ಮನಸ್ಸುಗಳಲ್ಲಿ ದೇವರಿಗೆ
ಶತ್ರುಗಳಾಗಿದ್ದಿರಿ. 22ಈಗಲಾದರೋ ಕ್ರಿಸ್ತನು ಶರೀರಧಾರಿ
ಯಾಗಿ ಈ ಲೋಕದಲ್ಲಿದ್ದಾಗ ತನ್ನ ಪ್ರಾಣವನ್ನೇ ಕೊಡುವುದರ
ಮೂಲಕ ನಿಮಗೂ ದೇವರಿಗೂ ಸಂಧಾನ ಮಾಡಿದ್ದಾನೆ.

ನಿಮ್ಮನ್ನು ಪರಿಶುದ್ಧರನ್ನಾಗಿಯೂ ನಿಷ್ಕಳಂಕರನ್ನಾಗಿಯೂ
ನಿರ್ದೋಷಿಗಳನ್ನಾಗಿಯೂ ದೇವರ ಸನ್ನಿಧಿಯಲ್ಲಿ ನಿಲ್ಲಿಸ
ಬೇಕೆಂಬುದೇ ಕ್ರಿಸ್ತನ ಉದ್ದೇಶವಾಗಿತ್ತು. 23ನೀವು ಕೇಳಿದ
ಸುವಾರ್ತೆಯ ಮೇಲೆ ನಿಮಗಿರುವ ನಂಬಿಕೆಯಲ್ಲಿ ದೃಢವಾಗಿ
ನೆಲೆಗೊಂಡಿದ್ದು ಅದರಿಂದುಂಟಾಗುವ ನಿರೀಕ್ಷೆಯನ್ನು ಬಿಟ್ಟು
ಹೋಗದಿದ್ದರೆ ಇದು ಸಾಧ್ಯ. ಈ ಸುವಾರ್ತೆಯನ್ನು ಪ್ರಪಂಚದ
ಜನರಿಗೆಲ್ಲ ಸಾರಲಾಗಿದೆ. ಪೌಲನಾದ ನಾನು ಈ ಸುವಾರ್ತೆ
ಯನ್ನು ಸಾರುವ ಸೇವಕನಾದೆನು.

### ಸಭೆಗಾಗಿ ಪೌಲನ ಕಾರ್ಯ

24ನಾನು ನಿಮಗಾಗಿ ಅನುಭವಿಸಿದ ಬಾಧೆಗಳಿಂದ ನನಗೆ
ಸಂತೋಷವಾಗಿದೆ. ಕ್ರಿಸ್ತನು ಸಭೆಯೆಂಬ ತನ್ನ ದೇಹದ
ಮೂಲಕ ಇನ್ನೂ ಅನೇಕ ಸಂಕಟಗಳನ್ನು ಅನುಭವಿಸ
ಬೇಕಾಗಿದೆ. ಈ ಸಂಕಟಗಳಲ್ಲಿ ನಾನು ಅನುಭವಿಸಬೇಕಾದವು
ಗಳನ್ನು ಆತನ ದೇಹಕ್ಕೋಸ್ಕರ ನನ್ನ ದೇಹದಲ್ಲಿ ಅನುಭವಿಸು
ತ್ತೇನೆ. 25ನಾನು ಸಭೆಗೆ ಸೇವಕನಾದೆನು. ಏಕೆಂದರೆ ದೇವರು
ನನಗೆ ವಿಶೇಷವಾದ ಕಾರ್ಯವನ್ನು ಮಾಡುವಂತೆ ಆಜ್ಞಾಪಿ
ಸಿದನು.ಈ ಕಾರ್ಯವು ನಿಮಗೆ ಸಹಾಯ ಮಾಡುವುದು.
ದೇವರ ಉಪದೇಶವನ್ನು ಸಂಪೂರ್ಣವಾಗಿ ತಿಳಿಸುವುದೇ ಆ
ಕಾರ್ಯ. 26ಆದಿಕಾಲದಿಂದಲೂ ಅಡಗಿಸಿಟ್ಟಿದ್ದ ರಹಸ್ಯಸತ್ಯವೇ
ಈ ಉಪದೇಶ. ಈ ಸತ್ಯವನ್ನು ಎಲ್ಲಾ ಜನರಿಗೆ ಮರೆಮಾಡ
ಲಾಗಿತ್ತು. ಈಗಲಾದರೊ ಈ ರಹಸ್ಯಸತ್ಯವನ್ನು ದೇವರ ಪವಿತ್ರ
ಜನರಿಗೆ ತಿಳಿಸಲಾಗಿದೆ. 27ಮಹಿಮಾತಿಶಯವಾದ ಈ ಸತ್ಯವನ್ನು
ಎಲ್ಲಾ ಜನರಿಗೆ ತಿಳಿಸಲು ದೇವರು ತೀರ್ಮಾನಿಸಿದನು. ಈ
ಮಹಾಸತ್ಯವು ಎಲ್ಲಾ ಜನರಿಗಾಗಿ ಪ್ರಕಟವಾಯಿತು. ನಿಮ್ಮ
ಲ್ಲಿರುವ ಕ್ರಿಸ್ತನೇ ಆ ಸತ್ಯವಾಗಿದ್ದಾನೆ. ದೇವರ ಮಹಿಮೆಯಲ್ಲಿ
ಪಾಲುಹೊಂದಲು ಆತನೇ ನಮಗಿರುವ ಏಕೈಕ ನಿರೀಕ್ಷೆ.
28ಆದ್ದರಿಂದಲೇ ನಾವು ಕ್ರಿಸ್ತನ ಬಗ್ಗೆ ಜನರಿಗೆ ತಿಳಿಸುವವ
ರಾಗಿದ್ದೇವೆ. ಪ್ರತಿಯೊಬ್ಬರನ್ನೂ ಬಲಪಡಿಸುವುದಕ್ಕಾಗಿ
ಪ್ರತಿಯೊಬ್ಬರಿಗೂ ಉಪದೇಶಿಸುವುದಕ್ಕಾಗಿ ನಮ್ಮ ಜ್ಞಾನ
ವನ್ನೆಲ್ಲಾ ಉಪಯೋಗಿಸುತ್ತೇವೆ. ಪ್ರತಿಯೊಬ್ಬರನ್ನು ಕ್ರಿಸ್ತನಲ್ಲಿ
ಸಂಪೂರ್ಣ ಆತ್ಮಿಕರನ್ನಾಗಿ ಮಾಡಿ ದೇವರ ಸನ್ನಿಧಿಗೆ ತರಲು
ಪ್ರಯತ್ನಿಸುತ್ತೇವೆ. 29ಕ್ರಿಸ್ತನು ನನಗೆ ನೀಡಿರುವ ಬಲದಿಂದ ಇದ
ಕ್ಕೋಸ್ಕರವೇ ಕೆಲಸ ಮಾಡುತ್ತೇನೆ ಮತ್ತು ಹೋರಾಡುತ್ತೇನೆ.
ಆ ಬಲವೇ ನನ್ನ ಜೀವನದಲ್ಲಿ ಕಾರ್ಯಮಾಡುತ್ತಿದೆ.

2 ನಿಮಗೆ ಸಹಾಯ ಮಾಡಲು ನಾನು ಬಹಳವಾಗಿ ಮಾಡು
ತ್ತಿರುವ ಪ್ರಯತ್ನ ನಿಮಗೆ ತಿಳಿದಿರಬೇಕೆಂಬುದು ನನ್ನ
ಅಪೇಕ್ಷೆ. ಇದಲ್ಲದೆ ಲವೊದಿಕೀಯದಲ್ಲಿರುವವರಿಗೆ ಮತ್ತು
ನನ್ನನ್ನು ಎಂದೂ ನೋಡಿಲ್ಲದವರಿಗೆ ಸಹ ಸಹಾಯ ಮಾಡಲು
ಪ್ರಯತ್ನಿಸುತ್ತಿದ್ದೇನೆ. 2ಅವರೆಲ್ಲರೂ ಆಂತರ್ಯದಲ್ಲಿ ಉತ್ತೇಜಿತ
ರಾಗಿ ಪ್ರೀತಿಯಿಂದ ಒಂದಾಗಿರಬೇಕೆಂದು ಮತ್ತು ತಿಳಿವಳಿಕೆ
ಯಿಂದ ಬರುವ ದೃಢನಂಬಿಕೆಯಲ್ಲಿ ಶ್ರೀಮಂತರಾಗಿರ
ಬೇಕೆಂದು ಆಶಿಸುತ್ತೇನೆ. ಅಂದರೆ ದೇವರ ನಿಗೂಢಸತ್ಯವನ್ನು
ಅವರು ಸಂಪೂರ್ಣವಾಗಿ ತಿಳಿದುಕೊಳ್ಳಬೇಕು. ಸ್ವತಃ ಕ್ರಿಸ್ತನೇ
ಆ ಸತ್ಯ. 3ಕ್ರಿಸ್ತನಲ್ಲಿ ಸರ್ವಜ್ಞಾನವು ಮತ್ತು ತಿಳುವಳಿಕೆಯು
ಬಚ್ಚಿಟ್ಟಿರುವ ನಿಕ್ಷೇಪಗಳಂತಿವೆ. 4ಯಾವನೂ ನಿಮ್ಮನ್ನು
ಸರಿಯೆನಿಸುವ ಸುಳ್ಳು ಮಾತುಗಳಿಂದ ಮೋಸಗೊಳಿಸದಂತೆ ಈ
ಸಂಗತಿಗಳನ್ನು ನಿಮಗೆ ಹೇಳಿದ್ದೇನೆ. 5ಅಲ್ಲಿ ನಾನು ನಿಮ್ಮೊಡನೆ
ಇರದಿದ್ದರೂ ನನ್ನ ಮನಸ್ಸು ನಿಮ್ಮೊಡನಿರುತ್ತದೆ. ನಿಮ್ಮ ಕ್ರಮ
ಬದ್ಧವಾದ ನಡತೆಯನ್ನು ನೋಡಲು ಮತ್ತು ಕ್ರಿಸ್ತನಲ್ಲಿನಟ್ಟಿರುವ
ದೃಢನಂಬಿಕೆಯನ್ನು ಅರಿಯಲು ಬಹಳ ಸಂತೋಷಪಡುತ್ತೇನೆ.

### ಕ್ರಿಸ್ತನಲ್ಲಿ ನೆಲೆಗೊಂಡಿರಿ

6ಪ್ರಭುವಾದ ಕ್ರಿಸ್ತ ಯೇಸುವನ್ನು ನೀವು ಸ್ವೀಕರಿಸಿಕೊಂಡಿರು
ವುದರಿಂದ ಆತನಲ್ಲಿ ನೆಲೆಗೊಂಡಿದ್ದು ಜೀವಿಸಿರಿ. 7ಕ್ರಿಸ್ತನನ್ನು
ಮಾತ್ರ ನೀವು ಅವಲಂಬಿಸಬೇಕು. ಜೀವವೂ ಶಕ್ತಿಯೂ ಆತ
ನಿಂದಲೇ ಬರುತ್ತವೆ. ನಿಮಗೆ ಸತ್ಯವನ್ನು ಉಪದೇಶಿಸಲಾಗಿದೆ.
ನೀವು ಆ ಸತ್ಯ ಬೋಧನೆಯಲ್ಲಿ ದೃಢವಾಗಿ ನೆಲೆಗೊಂಡಿರಬೇಕು
ಮತ್ತು ದೇವರಿಗೆ ಸಲ್ಲತಕ್ಕ ಕೃತಜ್ಞತಾಸ್ತುತಿಯಿಂದ ತುಂಬಿದವ
ರಾಗಿರಬೇಕು. 8ಯಾರೂ ನಿಮ್ಮನ್ನು ಮೋಸಕರವಾದ ಮತ್ತು
ನಿರರ್ಥಕವಾದ ತತ್ವಜ್ಞಾನ ಬೋಧೆಯಿಂದ ತಪ್ಪು ದಾರಿಗೆ ನಡೆಸ
ದಂತೆ ಜಾಗ್ರತೆಯಿಂದಿರಿ. ಆ ತತ್ವ ಜ್ಞಾನಗಳು ಜನರಿಂದ
ಬಂದುವೇ ಹೊರತು ಕ್ರಿಸ್ತನಿಂದಲ್ಲ. ಅವು ಈ ಲೋಕದ ಜನರ
ನಿರರ್ಥಕ ತತ್ವಗಳು. 9ದೇವರ ಸರ್ವಸಂಪೂರ್ಣತೆಯು ಕ್ರಿಸ್ತ
ನಲ್ಲಿ ನೆಲೆಗೊಂಡಿದೆ.(ಕ್ರಿಸ್ತನು ಈ ಲೋಕದಲ್ಲಿದ್ದಾಗಲೂ ಸಹ
ನೆಲೆಗೊಂಡಿತ್ತು.) 10ನೀವೆಲ್ಲರೂ ಕ್ರಿಸ್ತನಲ್ಲಿ ಸಂಪೂರ್ಣರಾಗಿ
ದ್ದೀರಿ. ನಿಮಗೆ ಬೇರೇನೂ ಬೇಕಿಲ್ಲ. ಕ್ರಿಸ್ತನು ಎಲ್ಲ ದೊರೆತನ
ಗಳನ್ನು ಮತ್ತು ಅಧಿಕಾರಗಳನ್ನು ಆಳುತ್ತಾನೆ.

11ಕ್ರಿಸ್ತನಲ್ಲಿ ನೀವು ಬೇರೊಂದು ಸುನ್ನತಿಯನ್ನು
ಪಡೆದಿರುವಿರಿ. ಆ ಸುನ್ನತಿಯು ಕೈಯಿಂದ ಮಾಡಿದ್ದಲ್ಲ. ಅಂದರೆ
ನಿಮ್ಮ ಪಾಪಾಧೀನ ಸ್ವಭಾವದಿಂದ ನಿಮಗೆ ಬಿಡುಗಡೆ
ಯಾಯಿತು. ಇದುವೇ ಕ್ರಿಸ್ತನು ಮಾಡುವ ಸುನ್ನತಿ. 12ನೀವು
ದೀಕ್ಷಾಸ್ನಾನ ಮಾಡಿಸಿಕೊಂಡಾಗ ಕ್ರಿಸ್ತನೊಂದಿಗೆ ಹೂಳಲ್ಪಟ್ಟಿರಿ.
ದೇವರು ಕ್ರಿಸ್ತನನ್ನು ಸತ್ತವರೊಳಗಿಂದ ಎಬ್ಬಿಸುವುದರ ಮೂಲಕ
ತೋರಿದ ಶಕ್ತಿಯಲ್ಲಿ ನಂಬಿಕೆಯಿಡುವುದರ ಮೂಲಕ ನೀವು
ಆ ದೀಕ್ಷಾಸ್ನಾನದಲ್ಲಿ ಕ್ರಿಸ್ತನೊಂದಿಗೆ ಮೇಲಕ್ಕೆ ಎದ್ದುಬಂದಿರಿ.
13ನೀವು ನಿಮ್ಮ ಪಾಪಗಳ ದೆಸೆಯಿಂದ ಮತ್ತು ನಿಮ್ಮ ಪಾಪ
ಸ್ವಭಾವದ ಹಿಡಿತದಿಂದ ಇನ್ನೂ ಮುಕ್ತರಾಗದೆ ಇದ್ದುದರಿಂದ
ಆತ್ಮಿಕವಾಗಿ ಸತ್ತವರಾಗಿದ್ದಿರಿ. ಆದರೆ ದೇವರು ನಿಮಗೆ
ಕ್ರಿಸ್ತನೊಂದಿಗೆ ಜೀವವನ್ನು ದಯಪಾಲಿಸಿದನು. ಆತನು ನಮ್ಮ
ಎಲ್ಲಾ ಪಾಪಗಳನ್ನು ಕ್ಷಮಿಸಿದನು. 14ದೇವರ ನಿಯಮಗಳನ್ನು
ಉಲ್ಲಂಘಿಸಿದ್ದರಿಂದ ನಾವು ಅಪರಾಧಿಗಳಾಗಿದ್ದೆವು. ನಮ್ಮ
ಮೇಲೆ ಹೊರಿಸಲಾದ ದೋಷಾರೋಪಣೆಯ ಪಟ್ಟಿಯಲ್ಲಿ
ನಾವು ಉಲ್ಲಂಘಿಸಿದ ಆಜ್ಞೆಗಳನ್ನೆಲ್ಲ ಲಿಖಿತಗೊಳಿಸಲಾಗಿತ್ತು.
ಆದರೆ ದೇವರು ನಮ್ಮ ಅಪರಾಧಗಳನ್ನೆಲ್ಲ ಕ್ಷಮಿಸಿ ಅವುಗಳನ್ನು
ಶಿಲುಬೆಗೆ ಜಡಿದನು. 15ದೇವರು ತನಗೆ ವಿರೋಧವಾಗಿದ್ದ
ದೊರೆತನಗಳನ್ನೂ ಅಧಿಕಾರಗಳನ್ನೂ ಸೋಲಿಸಿ, ಅವರನ್ನು
ನಿರಾಯುಧರನ್ನಾಗಿ ಮಾಡಿ ಶಿಲುಬೆಯ ವಿಜಯೋತ್ಸವದಲ್ಲಿ
ಅವರನ್ನೂ ಇಡೀ ಲೋಕದ ಎದುರಿನಲ್ಲಿ ಸೆರೆಯಾಳುಗಳನ್ನಾಗಿ
ಮೆರವಣಿಗೆ ಮಾಡಿದನು.

### ಮಾನವ ನಿರ್ಮಿತ ನಿಯಮಗಳನ್ನು ಅನುಸರಿಸಬೇಡಿ

16ಹೀಗಿರುವುದರಿಂದ ತಿಂದು ಕುಡಿಯುವುದರ ಬಗ್ಗೆ ಇಲ್ಲವೆ
ಯೆಹೊದ್ಯರ ಪದ್ಧತಿಗಳ (ಹಬ್ಬಗಳು, ಅಮಾವಾಸ್ಯೆಯ ಆಚರಣೆ

ಗಳು, ಸಬ್ಬತ್ ದಿನಗಳು) ಬಗ್ಗೆಯೂ ನಿಮಗೆ ನಿಯಮಗಳನ್ನು
ರೂಪಿಸಲು ಯಾರಿಗೂ ಅವಕಾಶ ಕೊಡಬೇಡಿ. 17ಪೂರ್ವಕಾಲ
ದಲ್ಲಿ ಈ ಸಂಗತಿಗಳೆಲ್ಲ ಮುಂದೆ ಬರಬೇಕಾಗಿದ್ದವುಗಳ
ಛಾಯೆಗಳಾಗಿದ್ದವು. ಅವುಗಳ ನಿಜರೂಪವು ಕ್ರಿಸ್ತನಲ್ಲಿ ತೋರಿ
ಬಂದಿತು. 18ಕೆಲವರು ದೇವದೂತರ ಪೂಜೆಯಲ್ಲಿಯೂ
ಅತಿವಿನಯವಂತರಂತೆ ನಟಿಸುವುದರಲ್ಲಿಯೂ ಆಸಕ್ತರಾಗಿ
ದ್ದಾರೆ. ಆ ಜನರು ತಾವು ಕಂಡ ದರ್ಶನಗಳ ಬಗ್ಗೆ ಯಾವಾಗಲೂ
ಮಾತನಾಡುತ್ತಿರುತ್ತಾರೆ. ‘‘ನೀವು ಇಂಥಿಂಥ ಕಾರ್ಯಗಳನ್ನು
ಮಾಡದಿರುವುದರಿಂದ ತಪ್ಪಿತಸ್ಥರಾಗಿದ್ದೀರಿ’’ ಎಂದು ಆ ಜನರು
ನಿಮ್ಮ ಬಗ್ಗೆ ಹೇಳಲು ಅವಕಾಶ ಕೊಡಬೇಡಿ. ಅವರ ಪ್ರಾಪಂಚಿಕ
ಆಲೋಚನೆಯು ಅವರನ್ನು ನಿಷ್ಕಾರಣವಾಗಿ ಗರ್ವದಿಂದ
ಉಬ್ಬಿಸುತ್ತದೆ. 19ಆ ಜನರು ತಮ್ಮನ್ನು ಕ್ರಿಸ್ತನೆಂಬ ಶಿರಸ್ಸಿನ
ಅಧೀನಕ್ಕೆ ಒಳಪಡಿಸುವುದಿಲ್ಲ. ಇಡೀ ದೇಹವು ಆತನನ್ನೇ
ಅವಲಂಬಿಸಿಕೊಂಡಿದೆ. ಆತನಿಂದಲೇ ದೇಹದ ಅಂಗಾಂಗಗಳು
ಇತರ ಅಂಗಗಳ ಬಗ್ಗೆ ಚಿಂತಿಸುತ್ತವೆ ಮತ್ತು ಪರಸ್ಪರ ಸಹಾಯ
ಮಾಡುತ್ತವೆ. ಇದರಿಂದ ದೇಹವು ಬಲಗೊಂಡು ಒಂದಾಗಿ
ಕೂಡಿಸಲ್ಪಡುತ್ತದೆ. ಹೀಗೆ, ದೇವರ ಇಚ್ಛೆಯಂತೆ ದೇಹವು
ಬೆಳೆಯುತ್ತದೆ.
20ನೀವು ಕ್ರಿಸ್ತನೊಂದಿಗೆ ಸತ್ತು ಪ್ರಾಪಂಚಿಕವಾದ
ನಿರರ್ಥಕ ನಿಯಮಗಳಿಂದ ಬಿಡುಗಡೆ ಹೊಂದಿದ್ದೀರಿ. ಹೀಗಿ
ದ್ದರೂ ನೀವು ಈ ಲೋಕಕ್ಕೆ ಸೇರಿದವರಂತೆ ವರ್ತಿಸುವುದೇಕೆ?
ಈ ನಿಯಮಗಳನ್ನು ಏಕೆ ಅನುಸರಿಸುತ್ತಿರುವಿರಿ ಎಂಬುದೇ ನನ್ನ
ಮಾತಿನ ಅರ್ಥ: 21‘‘ಇದನ್ನು ತಿನ್ನಬೇಡ’’, ‘‘ಅದರ ರುಚಿ
ನೋಡಬೇಡ’’, ‘‘ಅದನ್ನು ಮುಟ್ಟಬೇಡ’’ ಎಂದು
ಹೇಳುವುದೇಕೆ? 22ಪ್ರಾಪಂಚಿಕ ವಿಷಯಗಳ ಕುರಿತಾದ ಈ
ನಿಯಮಗಳೆಲ್ಲ ಬಳಸಿದ ಮೇಲೆ ನಾಶವಾಗುತ್ತವೆ. ಅವುಗಳು
ಜನರ ಆಜ್ಞೆ ಮತ್ತು ಜನರ ಉಪದೇಶಗಳೇ ಹೊರತು
ದೇವರವಲ್ಲ. 23ಈ ನಿಯಮಗಳು ನೋಡುವುದಕ್ಕೆ ಬುದ್ಧಿ
ಯುಳ್ಳವಾಗಿವೆ. ಆದರೆ ಅತಿವಿನಯವಂತರಂತೆ ನಟಿಸಲು
ಮತ್ತು ತಮ್ಮ ದೇಹಗಳನ್ನು ದಂಡಿಸಲು ಜನರನ್ನು ಪ್ರೇರೇಪಿಸುವ
ಅವುಗಳು ಕೇವಲ ಮಾನವ ನಿರ್ಮಿತವಾದ ಧರ್ಮದ ಒಂದು
ಭಾಗವಾಗಿವೆ. ಆದರೆ ಪಾಪಸ್ವಭಾವವು ಇಚ್ಛಿಸುವ ದುಷ್ಟಕಾರ್ಯ
ಗಳನ್ನು ಮಾಡದಂತೆ ಅವು ಜನರಿಗೆ ಯಾವ ಸಹಾಯವನ್ನೂ
ಮಾಡುವುದಿಲ್ಲ.

## ಕ್ರಿಸ್ತನಲ್ಲಿ ನಿಮ್ಮ ಹೊಸ ಜೀವನ

3 ನೀವು ಕ್ರಿಸ್ತನ ಜೊತೆಯಲ್ಲಿ ಜೀವಂತವಾಗಿ ಎದ್ದು
ಬಂದಿರುವುದರಿಂದ ಪರಲೋಕದವುಗಳನ್ನು ಪಡೆಯಲು
ಪ್ರಯತ್ನಿಸಿರಿ. ಕ್ರಿಸ್ತ ಯೇಸು ಪರಲೋಕದಲ್ಲಿ ದೇವರ ಬಲಗಡೆ
ಆಸನಾರೂಢನಾಗಿದ್ದಾನೆ. 2ಪರಲೋಕದವುಗಳನ್ನು ಮಾತ್ರ
ಆಲೋಚಿಸಿ, ಭೂಲೋಕದವುಗಳನ್ನು ಆಲೋಚಿಸಬೇಡಿ.
3ನಿಮ್ಮ ಹಳೆಯ ಸ್ವಭಾವ ಸತ್ತುಹೋಗಿದೆ, ನಿಮ್ಮ ಹೊಸ ಜೀವವು
ಕ್ರಿಸ್ತನೊಂದಿಗೆ ದೇವರಲ್ಲಿದೆ. 4ಕ್ರಿಸ್ತನೇ ನಿಮ್ಮ ಜೀವ, ಆತನು
ಮರಳಿ ಪ್ರತ್ಯಕ್ಷನಾದಾಗ, ನೀವೂ ಆತನ ಪ್ರಭಾವದೊಂದಿಗೆ
ಪ್ರತ್ಯಕ್ಷರಾಗುವಿರಿ. 5ಆದುದರಿಂದ ದುಷ್ಟಕಾರ್ಯಗಳಾದ
ಲೈಂಗಿಕ ಪಾಪ, ದುರಾಚಾರ, ಕಾಮಾಭಿಲಾಷೆ, ದುರಾಶೆ ಮತ್ತು
ಸ್ವಾರ್ಥತೆಗಳನ್ನು ನಿಮ್ಮ ಜೀವಿತದಿಂದ ತೆಗೆದುಹಾಕಿರಿ.
ಸ್ವಾರ್ಥವು ವಿಗ್ರಹಾರಾಧನೆಗೆ ಸಮವಾಗಿದೆ. 6ಇವು ದೇವರನ್ನು
ಕೋಪಗೊಳಿಸುತ್ತವೆ. 7ಪೂರ್ವಕಾಲದ ನಿಮ್ಮ ದುಷ್ಟಜೀವನ
ದಲ್ಲಿ ಈ ಕಾರ್ಯಗಳನ್ನೆಲ್ಲ ನೀವು ಮಾಡಿರುವಿರಿ.
8ಈಗಲಾದರೂ ಕೋಪ, ಕ್ರೋಧ, ಮತ್ಸರ, ಚುಚ್ಚುಮಾತು
ಮತ್ತು ದುರ್ಭಾಷೆಗಳನ್ನು ನಿಮ್ಮ ಜೀವಿತದಿಂದ ತೆಗೆದುಹಾಕಿರಿ.
9ಒಬ್ಬರಿಗೊಬ್ಬರು ಸುಳ್ಳು ಹೇಳಬೇಡಿ. ಏಕೆಂದರೆ ನೀವು ನಿಮ್ಮ
ಹಳೆಯ ಪಾಪಪೂರಿತ ಜೀವನವನ್ನು ಮತ್ತು ನಿಮ್ಮ ಮೊದಲಿನ
ಕಾರ್ಯಗಳನ್ನು ಬಿಟ್ಟುಬಿಟ್ಟಿದ್ದೀರಿ. 10ನೀವು ಹೊಸ ಜೀವನ
ವನ್ನು ಆರಂಭಿಸಿರುವಿರಿ. ಈ ಹೊಸ ಜೀವನದಲ್ಲಿ ನೀವು
ನಿಮ್ಮನ್ನು ಸೃಷ್ಟಿಸಿದಾತನ ಹೋಲಿಕೆಯ ಮೇರೆಗೆ ನೂತನರಾಗು
ತ್ತಿದ್ದೀರಿ. ದೇವರ ಬಗ್ಗೆ ನಿಜವಾದ ತಿಳುವಳಿಕೆಯನ್ನು ಈ
ಹೊಸ ಜೀವನ ಕೊಡುತ್ತದೆ. 11ಈ ಹೊಸಜೀವನದಲ್ಲಿ ಗ್ರೀಕರ
ಮತ್ತು ಯೆಹೂದ್ಯರ ಮಧ್ಯದಲ್ಲಾಗಲಿ, ಸುನ್ನತಿಯನ್ನು ಮಾಡಿಸಿ
ಕೊಂಡಿರುವ ಮತ್ತು ಮಾಡಿಸಿಕೊಂಡಿಲ್ಲದ ಜನರ ಮಧ್ಯ
ದಲ್ಲಾಗಲಿ, ಪರದೇಶದವರ ಅಥವಾ ಅನಾಗರೀಕರ ಮಧ್ಯ
ದಲ್ಲಾಗಲಿ, ಗುಲಾಮರ ಅಥವಾ ಸ್ವತಂತ್ರರಾದ ಜನರ ಮಧ್ಯ
ದಲ್ಲಾಗಲಿ ಯಾವ ಭೇದವೂ ಇಲ್ಲ. ಎಲ್ಲಾ ವಿಶ್ವಾಸಿ
ಗಳಲ್ಲಿಯೂ ಕ್ರಿಸ್ತನಿದ್ದಾನೆ. ಅವರಿಗೆ ಕ್ರಿಸ್ತನೊಬ್ಬನೇ ಅಗತ್ಯ.
12ದೇವರು ನಿಮ್ಮನ್ನು ಆರಿಸಿಕೊಂಡಿದ್ದಾನೆ ಮತ್ತು ನಿಮ್ಮನ್ನು
ತನ್ನ ಪವಿತ್ರ ಜನರನ್ನಾಗಿಸಿದ್ದಾನೆ. ಆತನು ನಿಮ್ಮನ್ನು
ಪ್ರೀತಿಸುತ್ತಾನೆ. ಹೀಗಿರಲಾಗಿ ಕನಿಕರ, ದಯೆ, ದೀನತೆ,
ವಿನಯಶೀಲತೆ, ಶಾಂತಿ, ಸಹನೆ ಎಂಬ ಸದ್ಗುಣಗಳನ್ನು
ಧರಿಸಿಕೊಳ್ಳಿರಿ. 13ಒಬ್ಬರನ್ನೊಬ್ಬರು ಸಹಿಸಿಕೊಳ್ಳಿರಿ. ಬೇರೆ
ಯವರ ಮೇಲೆ ಹೇಳುವಂಥ ದೂರುಗಳು ನಿಮ್ಮಲ್ಲಿದ್ದರೂ
ಕ್ಷಮಿಸಿಬಿಡಿರಿ. ಪ್ರಭುವು ನಿಮ್ಮನ್ನು ಕ್ಷಮಿಸಿದ್ದರಿಂದ ನೀವೂ
ಇತರರನ್ನು ಕ್ಷಮಿಸಿರಿ. 14ಎಲ್ಲಕ್ಕಿಂತ ಹೆಚ್ಚಾಗಿ ನಿಮ್ಮಲ್ಲಿ ಪ್ರೀತಿ
ಯಿರಲಿ. ಪ್ರೀತಿಯು ನಿಮ್ಮನ್ನೆಲ್ಲರನ್ನೂ ಸಂಪೂರ್ಣವಾದ
ಒಗ್ಗಟ್ಟಿನಲ್ಲಿರಿಸುವುದು. 15ಕ್ರಿಸ್ತನು ನೀಡುವ ಶಾಂತಿಯು ನಿಮ್ಮ
ಆಲೋಚನೆಗಳನ್ನೆಲ್ಲ ತನ್ನ ಹತೋಟಿಯಲ್ಲಿಟ್ಟುಕೊಂಡಿರಲಿ.
ನೀವೆಲ್ಲರೂ ಒಂದೇ ದೇಹಕ್ಕೆ ಸೇರಿದವರಾದ್ದರಿಂದ
ಶಾಂತಿಯಿಂದಿರಲು ಕರೆಯಲ್ಪಟ್ಟಿದ್ದೀರಿ. ಯಾವಾಗಲು
ಕೃತಜ್ಞರಾಗಿರಿ. 16ಕ್ರಿಸ್ತನ ಉಪದೇಶವು ನಿಮ್ಮ ಅಂತರಂಗದಲ್ಲಿ
ಸಮೃದ್ಧವಾಗಿ ನೆಲಸಿರಲಿ. ನೀವು ದೇವರಿಂದ ಕಲಿತು
ಕೊಂಡದ್ದನ್ನು ಉಪದೇಶಿಸುವುದಕ್ಕೂ ಒಬ್ಬರನ್ನೊಬ್ಬರು ಬಲ
ಪಡಿಸುವುದಕ್ಕೂ ಉಪಯೋಗಿಸಿರಿ. ನಿಮ್ಮ ಹೃದಯದಲ್ಲಿ
ದೇವರಿಗೆ ಕೃತಜ್ಞರಾಗಿದ್ದು ಹಾಡುಗಳನ್ನು, ಕೀರ್ತನೆಗಳನ್ನು,
ಸಂಗೀತಗಳನ್ನು ಹಾಡಿರಿ. 17ನೀವು ನುಡಿಯಿಂದಾಗಲಿ, ನಡೆ
ಯಿಂದಾಗಲಿ ಏನು ಮಾಡಿದರೂ ಅದೆಲ್ಲವನ್ನೂ ನಿಮ್ಮ ಪ್ರಭು
ವಾದ ಯೇಸುವಿಗಾಗಿ ಮಾಡಿರಿ. ನೀವು ಏನು ಮಾಡಿದರೂ
ಯೇಸುವಿನ ಮೂಲಕ ತಂದೆಯಾದ ದೇವರಿಗೆ ಕೃತಜ್ಞತೆಯನ್ನು
ಸಲ್ಲಿಸಿರಿ.

## ಇತರರೊಂದಿಗೆ ನಿಮ್ಮ ಹೊಸ ಜೀವನ

18ಸ್ತ್ರೀಯರೇ, ನಿಮ್ಮ ಗಂಡಂದಿರಿಗೆ ವಿಧೇಯರಾಗಿರಿ. ಇದು
ಪ್ರಭುವಿನಲ್ಲಿ ನೀವು ಮಾಡುವ ಯೋಗ್ಯ ಕಾರ್ಯವಾಗಿದೆ.
19ಪುರುಷರೇ, ನಿಮ್ಮ ಪತ್ನಿಯರನ್ನು ಪ್ರೀತಿಸಿ, ಅವರೊಡನೆ
ಸಾತ್ವಿಕರಾಗಿರಿ. 20ಮಕ್ಕಳೇ, ನಿಮ್ಮ ತಂದೆತಾಯಿಗಳಿಗೆ ಎಲ್ಲಾ

ವಿಷಯಗಳಲ್ಲಿಯೂ ವಿಧೇಯರಾಗಿರಿ. ಇದು ಪ್ರಭುವಿಗೆ
ಸಂತೋಷವನ್ನು ಉಂಟುಮಾಡುವುದು. 21ತಂದೆಗಳೇ, ನಿಮ್ಮ
ಮಕ್ಕಳಿಗೆ ಕಿರುಕುಳಕೊಡಬೇಡಿ. ಇಲ್ಲವಾದರೆ ಅವರು ಕುಂದಿ
ಹೋಗುವರು. 22ಸೇವಕರೇ, ಎಲ್ಲಾ ಕಾರ್ಯಗಳಲ್ಲಿಯೂ
ನಿಮ್ಮ ಯಜಮಾನರಿಗೆ ವಿಧೇಯರಾಗಿರಿ. ಅವರ ಮೆಚ್ಚಿಕೆ
ಯನ್ನು ಗಳಿಸುವುದಕ್ಕಾಗಿ ಅವರ ಕಣ್ಣೆದುರಿನಲ್ಲಿ ಮಾತ್ರ ಸೇವೆ
ಮಾಡದಿರಿ. ನೀವು ಪ್ರಭುವಿಗೆ ಭಯಪಡುವುದರಿಂದ ನಿಮ್ಮ
ಯಜಮಾನರಿಗೆ ಯಥಾರ್ಥವಾಗಿ ಸೇವೆ ಮಾಡಿರಿ. 23ಎಲ್ಲಾ
ಕಾರ್ಯಗಳನ್ನು ನಿಮ್ಮಿಂದಾದಷ್ಟು ಅತ್ಯುತ್ತಮವಾಗಿಯೇ
ಮಾಡಿರಿ. ಯಾವುದೇ ಕಾರ್ಯವನ್ನಾಗಲಿ ಜನರಿಗಾಗಿ ಮಾಡದೆ
ಪ್ರಭುವಿಗಾಗಿ ಮಾಡಿರಿ. 24ಪ್ರಭುವಿನಿಂದಲೇ ನಿಮಗೆ ಪ್ರತಿಫಲ
ದೊರೆಯುತ್ತದೆ ಎಂಬುದನ್ನು ಜ್ಞಾಪಕದಲ್ಲಿಟ್ಟುಕೊಂಡಿರಿ.
ಆತನು ತನ್ನ ಜನರಿಗೆ ಮಾಡಿದ ವಾಗ್ದಾನವು ನಿಮ್ಮ ನೆನಪಿ
ನಲ್ಲಿರಲಿ. 25ಅನ್ಯಾಯ ಮಾಡುವವನು ಅದಕ್ಕೆ ತಕ್ಕ ಶಿಕ್ಷೆಯನ್ನು
ಪಡೆಯುವನು. ಪ್ರಭುವಿನಲ್ಲಿ ಪಕ್ಷಪಾತವಿಲ್ಲ.

4 ಯಜಮಾನರೇ, ನಿಮ್ಮ ಸೇವಕರಿಗೆ ನ್ಯಾಯವಾದದ್ದನ್ನೂ
ಸರಿಯಾದದ್ದನ್ನೂ ಮಾಡಿರಿ. ಪರಲೋಕದಲ್ಲಿ ನಿಮಗೂ
ಒಬ್ಬ ಯಜಮಾನನಿದ್ದಾನೆ ಎಂಬುದು ನಿಮ್ಮ ಜ್ಞಾಪಕದಲ್ಲಿರಲಿ.

### ಕ್ರೈಸ್ತರು ಮಾಡತಕ್ಕ ಕಾರ್ಯಗಳು

2ಪ್ರಾರ್ಥನೆಯನ್ನು ತಪ್ಪದೆ ಮಾಡಿರಿ, ನೀವು ಪ್ರಾರ್ಥಿಸು
ವಾಗ, ಯಾವಾಗಲೂ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಿರಿ.
3ನಮಗಾಗಿಯೂ ನೀವು ಪ್ರಾರ್ಥಿಸಿ. ಜನರಿಗೆ ದೇವರ
ಸಂದೇಶವನ್ನು ತಿಳಿಸಲು ಅನುಕೂಲವಾದ ಸಂದರ್ಭವನ್ನು
ಆತನು ನಿಮಗೆ ದಯಪಾಲಿಸುವಂತೆ ಪ್ರಾರ್ಥಿಸಿರಿ. ದೇವರು
ಕ್ರಿಸ್ತನ ಬಗ್ಗೆ ತಿಳಿಸಿರುವ ಗುಪ್ತಸತ್ಯವನ್ನು ನಾವು ಬೋಧಿಸಲಾಗು
ವಂತೆ ಪ್ರಾರ್ಥಿಸಿರಿ. ನಾನು ಈ ಸತ್ಯವನ್ನು ಬೋಧಿಸಿದ್ದರಿಂದಲೇ
ಈಗ ಸೆರೆಮನೆಯಲ್ಲಿದ್ದೇನೆ. 4ಈ ಸತ್ಯವನ್ನು ನಾನು ಜನರಿಗೆ
ಸ್ಪಷ್ಟವಾಗಿಯೂ ಸರಳವಾಗಿಯೂ ತಿಳಿಸಲು ಸಾಧ್ಯವಾಗುವಂತೆ
ಪ್ರಾರ್ಥಿಸಿರಿ. 5ಅವಿಶ್ವಾಸಿಗಳೊಂದಿಗೆ ವ್ಯವಹರಿಸುವಾಗ ಜ್ಞಾನ
ವುಳ್ಳವರಾಗಿರಿ. ನಿಮ್ಮ ಸಮಯವನ್ನು ಅತ್ಯುತ್ತಮವಾದ ರೀತಿ
ಯಲ್ಲಿ ಬಳಸಿರಿ. 6ನೀವು ಮಾತನಾಡುವಾಗಲೆಲ್ಲಾ ದಯೆಯು
ಳ್ಳವರಾಗಿಯೂ ಜ್ಞಾನವುಳ್ಳವರಾಗಿಯೂ ಮಾತನಾಡಿರಿ. ಆಗ
ಪ್ರತಿಯೊಬ್ಬರಿಗೂ ಯೋಗ್ಯವಾದ ರೀತಿಯಲ್ಲಿ ಉತ್ತರಿಸಲು
ಶಕ್ತರಾಗುವಿರಿ.

### ಪೌಲನೊಂದಿಗಿರುವ ಜನರನ್ನು ಕುರಿತ ಸುದ್ದಿ

7ತುಖಿಕನು ಕ್ರಿಸ್ತನಲ್ಲಿ ನನ್ನ ಪ್ರೀತಿಯ ಸಹೋದರನಾಗಿ
ದ್ದಾನೆ. ನನ್ನೊಡನೆ ಅವನೂ ಪ್ರಭುವಿನಲ್ಲಿ ನಂಬಿಗಸ್ತನಾದ
ಸೇವಕನೂ ದಾಸನೂ ಆಗಿದ್ದಾನೆ. ನನಗೆ ಸಂಭವಿಸುತ್ತಿರುವು
ದನ್ನೆಲ್ಲ ಅವನು ನಿಮಗೆ ತಿಳಿಸುತ್ತಾನೆ. 8ಆದಕಾರಣವೇ ನಾನು
ಅವನನ್ನು ಕಳುಹಿಸುತ್ತಿದ್ದೇನೆ. ನಾವು ಹೇಗಿರುವೆವು ಎಂಬುದನ್ನು
ನೀವು ತಿಳಿದುಕೊಳ್ಳಬೇಕೆಂಬುದು ನನ್ನ ಅಪೇಕ್ಷೆ. ನಿಮ್ಮನ್ನು
ಪ್ರೋತ್ಸಾಹಿಸಲು ನಾನು ಅವನನ್ನು ಒನೇಸಿಮನ ಜೊತೆಯಲ್ಲಿ
ಕಳುಹಿಸುತ್ತಿದ್ದೇನೆ. 9ಒನೇಸಿಮನು ಕ್ರಿಸ್ತನಲ್ಲಿ ನಂಬಿಗಸ್ತನಾದ
ಪ್ರೀತಿಯ ಸಹೋದರನಾಗಿದ್ದಾನೆ. ಅವನು ನಿಮ್ಮ ಊರಿ
ನವನೇ. ಇಲ್ಲಿ ಸಂಭವಿಸಿದ್ದೆಲ್ಲವನ್ನು ಅವರು ನಿಮಗೆ ತಿಳಿಸುತ್ತಾರೆ.
10ಅರಿಸ್ತಾರ್ಕನು ವಂದನೆ ತಿಳಿಸಿದ್ದಾನೆ. ಅವನೂ ನನ್ನೊಡನೆ
ಸೆರೆಯಲ್ಲಿದ್ದಾನೆ. ಬಾರ್ನಬನಿಗೆ ಸೋದರ ಬಾಂಧವ್ಯವುಳ್ಳ
ಮಾರ್ಕನೂ ವಂದನೆಯನ್ನು ಹೇಳುತ್ತಾನೆ. (ಮಾರ್ಕನ ಬಗ್ಗೆ
ನೀವು ಏನು ಮಾಡಬೇಕೆಂಬುದನ್ನು ನಾನು ಈಗಾಗಲೇ
ಹೇಳಿದ್ದೇನೆ. ಅವನು ಬಂದರೆ ಅವನನ್ನು ಸ್ವಾಗತಿಸಿರಿ.)
11ಯೇಸುವು (ಯುಸ್ತನೆಂದೂ ಅವನನ್ನು ಕರೆಯುತ್ತಾರೆ.) ಸಹ
ವಂದನೆಯನ್ನು ಹೇಳುತ್ತಾನೆ. ಯೆಹೂದ್ಯರಲ್ಲಿ ವಿಶ್ವಾಸಿಗಳಾ
ಗಿರುವ ಇವರು ಮಾತ್ರವೇ ದೇವರ ರಾಜ್ಯಕ್ಕಾಗಿ ನನ್ನ ಜೊತೆ
ಕೆಲಸ ಮಾಡುತ್ತಿದ್ದಾರೆ. ಇವರೇ ನನಗೆ ಆದರಣೆಯಾಗಿದ್ದಾರೆ.
12ಎಪಫ್ರನು ಸಹ ವಂದನೆ ತಿಳಿಸಿದ್ದಾನೆ. ಅವನು ಯೇಸು ಕ್ರಿಸ್ತನ
ಸೇವಕನು. ಅವನು ನಿಮ್ಮವರಲ್ಲಿ ಒಬ್ಬನಾಗಿದ್ದಾನೆ. ಅವನು
ಯಾವಾಗಲೂ ನಿಮಗಾಗಿ ಪ್ರಾರ್ಥಿಸುತ್ತಾನೆ. ನೀವು ಆತ್ಮಿಕತೆ
ಯಲ್ಲಿ ಬೆಳೆಯುತ್ತಾ ಸಂಪೂರ್ಣತೆಯನ್ನು ಮುಟ್ಟಬೇಕೆಂತಲೂ
ದೇವರ ಚಿತ್ತವನ್ನು ಪೂರ್ಣವಾಗಿ ತಿಳಿದುಕೊಂಡು ದೃಢವಾಗಿರ
ಬೇಕೆಂತಲೂ ಪ್ರಾರ್ಥಿಸುತ್ತಾನೆ.

13ಅವನು ನಿಮಗೋಸ್ಕರ, ಲವೊದಿಕೀಯ ಮತ್ತು
ಹಿರೆಯಾಪೊಲಿಯದ ಜನರಿಗೋಸ್ಕರ ಬಹಳ ಪ್ರಯಾಸಪಟ್ಟು
ಕೆಲಸ ಮಾಡಿದನೆಂಬುದು ನನಗೆ ತಿಳಿದಿದೆ. 14ದೇಮನು ಮತ್ತು
ಪ್ರೀತಿಯ ಸ್ನೇಹಿತನಾದ ವೈದ್ಯ ಲೂಕನು ವಂದನೆಗಳನ್ನು ಹೇಳು
ತ್ತಾರೆ.

15ಲವೊದಿಕೀಯದಲ್ಲಿರುವ ಸಹೋದರ ಸಹೋದರಿ
ಯರಿಗೆ ವಂದನೆಗಳನ್ನು ತಿಳಿಸಿರಿ. ನುಂಫಳಿಗೂ ಅವಳ ಮನೆ
ಯಲ್ಲಿ ಸೇರುವ ಸಭೆಯವರಿಗೂ ವಂದನೆಗಳನ್ನು ತಿಳಿಸಿರಿ. 16ಈ
ಪತ್ರವನ್ನು ಓದಿದ ನಂತರ ಲವೊದಿಕಿಯದ ಸಭೆಯವರಿಗೂ
ಓದಲು ಕೊಡಿರಿ. ನಾನು ಲವೊದಿಕಿಯದವರಿಗೆ ಬರೆದಿರುವ
ಪತ್ರವನ್ನು ನೀವೂ ಓದಿರಿ. 17ಅರ್ಖಿಪ್ಪನಿಗೆ, ‘‘ಪ್ರಭುವು ನಿನಗೆ
ವಹಿಸಿರುವ ಸೇವೆಯನ್ನು ಖಂಡಿತವಾಗಿ ನೆರವೇರಿಸಬೇಕು’’
ಎಂದು ತಿಳಿಸಿರಿ.

18ನಿಮಗೆ ನನ್ನ ವಂದನೆಗಳು. ಪೌಲನೆಂಬ ನಾನು ನನ್ನ ಸ್ವಂತ
ಕೈಯಿಂದ ಇದನ್ನು ಬರೆದಿದ್ದೇನೆ. ಸೆರೆಮನೆಯಲ್ಲಿರುವ ನನ್ನನ್ನು
ಜ್ಞಾಪಿಸಿಕೊಳ್ಳಿರಿ. ದೇವರ ಕೃಪೆಯು ನಿಮ್ಮೊಂದಿಗಿರಲಿ.

# ಥೆಸಲೋನಿಕದವರಿಗೆ ಬರೆದ ಮೊದಲನೆ ಪತ್ರ

1 ತಂದೆಯಾದ ದೇವರಲ್ಲಿಯೂ ಮತ್ತು ಪ್ರಭುವಾದ ಯೇಸು
ಕ್ರಿಸ್ತನಲ್ಲಿಯೂ ಇರುವ ಥೆಸಲೋನಿಕದವರ ಸಭೆಗೆ
ಪೌಲನು, ಸಿಲ್ವಾನನು, ಮತ್ತು ತಿಮೊಥೆಯನು ಬರೆಯುವ ಪತ್ರ.
ದೇವರ ಕೃಪೆಯೂ ಶಾಂತಿಯೂ ನಿಮಗಿರಲಿ.

## ಥೆಸಲೋನಿಕದವರ ಜೀವನ ಮತ್ತು ನಂಬಿಕೆ

2 ದೇವರಿಗೆ ಪ್ರಾರ್ಥನೆ ಮಾಡುವಾಗ ನಿಮ್ಮನ್ನು ಯಾವಾ
ಗಲೂ ಜ್ಞಾಪಿಸಿಕೊಂಡು ನಿಮ್ಮೆಲ್ಲರ ವಿಷಯದಲ್ಲಿ ದೇವರಿಗೆ
ಕೃತಜ್ಞತಾಸ್ತುತಿ ಮಾಡುತ್ತೇವೆ. 3 ನಮ್ಮ ತಂದೆಯಾದ ದೇವರಿಗೆ
ಪ್ರಾರ್ಥನೆ ಮಾಡುವಾಗ ನಿಮ್ಮ ನಂಬಿಕೆಯ ಮತ್ತು ಪ್ರೀತಿಯ
ಫಲವಾಗಿ ಮಾಡಿದ ಕಾರ್ಯಗಳಿಗಾಗಿಯೂ ನಮ್ಮ ಪ್ರಭುವಾದ
ಯೇಸು ಕ್ರಿಸ್ತನಲ್ಲಿ ನಿಮಗಿರುವ ನಿರೀಕ್ಷೆಯಿಂದ ನೀವು
ದೃಢವಾಗಿರುವುದಕ್ಕಾಗಿಯೂ ನಾವು ಆತನಿಗೆ ಯಾವಾಗಲೂ
ಕೃತಜ್ಞತಾಸ್ತುತಿ ಮಾಡುತ್ತೇವೆ. 4 ಸಹೋದರ ಸಹೋದರಿ
ಯರೇ, ದೇವರು ನಿಮ್ಮನ್ನು ಪ್ರೀತಿಸುತ್ತಾನೆ. ಆತನು ನಿಮ್ಮನ್ನು
ತನ್ನವರನ್ನಾಗಿ ಆರಿಸಿಕೊಂಡಿದ್ದಾನೆಂಬುದೂ ನಮಗೆ ತಿಳಿದಿದೆ.
5 ನಿಮಗೆ ಸುವಾರ್ತೆಯನ್ನು ಶಕ್ತಿಯೊಡನೆ ತಂದಿದ್ದೇವೆ. ಕೇವಲ
ನುಡಿಗಳನ್ನು ಬಳಸದೆ ಅದನ್ನು ಪವಿತ್ರಾತ್ಮನೊಡನೆಯೂ ಮತ್ತು
ಅದು ಸತ್ಯವೆಂಬ ನಿಶ್ಚಿತ ಜ್ಞಾನದೊಡನೆಯೂ ತಂದಿದ್ದೇವೆ.
ಇದಲ್ಲದೆ ನಾವು ನಿಮ್ಮೊಡನೆ ಇದ್ದಾಗ ನಿಮಗೋಸ್ಕರ ಹೇಗೆ
ಜೀವಿಸಿದ್ದೆವು ಎಂಬುದು ನಿಮಗೆ ತಿಳಿದಿದೆ. ನಿಮಗೆ ಸಹಾಯ
ಮಾಡುವುದಕ್ಕಾಗಿ ಹಾಗೆ ಜೀವಿಸಿದೆವು. 6 ನೀವು ನಮ್ಮನ್ನೂ
ಪ್ರಭುವನ್ನೂ ಅನುಸರಿಸಿದಿರಿ; ಬಹಳ ಹಿಂಸೆಯನ್ನು ಅನುಭವಿ
ಸಿದಿರಿ; ನಮ್ಮ ಉಪದೇಶವನ್ನು ನೀವು ಸಂತಸದಿಂದ ಒಪ್ಪಿ
ಕೊಂಡಿರಿ. ಪವಿತ್ರಾತ್ಮನೇ ನಿಮಗೆ ಆ ಸಂತಸವನ್ನು ನೀಡಿದನು.
7 ಮಕೆದೋನಿಯ ಮತ್ತು ಅಖಾಯದಲ್ಲಿದ್ದ ನಂಬಿಗಸ್ತರಿಗೆಲ್ಲಾ
ನೀವು ಮಾದರಿಯಾದಿರಿ. 8 ಪ್ರಭುವಿನ ಉಪದೇಶವು
ಮಕೆದೋನಿಯ ಮತ್ತು ಅಖಾಯದಲ್ಲಿ ನಿಮ್ಮಿಂದ ಪ್ರಚಾರ
ವಾಯಿತು. ಇದಲ್ಲದೆ ದೇವರ ಮೇಲಿನ ನಿಮ್ಮ ನಂಬಿಕೆಯು
ಎಲ್ಲಾ ಕಡೆಗಳಲ್ಲಿಯೂ ತಿಳಿದುಬಂದಿತು. ಆದುದರಿಂದ ನಿಮ್ಮ
ನಂಬಿಕೆಯ ಬಗ್ಗೆ ಏನೂ ಹೇಳಬೇಕಾಗಿಲ್ಲ. 9 ನಾವು ನಿಮ್ಮೊಡನೆ
ಇದ್ದಾಗ ನೀವು ನಮ್ಮ ಬೋಧನೆಯನ್ನು ಹೃತ್ಪೂರ್ವಕವಾಗಿ
ಸ್ವೀಕರಿಸಿಕೊಂಡದ್ದರ ಕುರಿತಾಗಿಯೂ ವಿಗ್ರಹಾರಾಧನೆಯನ್ನು
ನಿಲ್ಲಿಸಿ ಜೀವವುಳ್ಳ ಸತ್ಯದೇವರನ್ನು ಆರಾಧಿಸತೊಡಗಿದ್ದರ
ಕುರಿತಾಗಿಯೂ ಅಲ್ಲಿನ ಜನರೆಲ್ಲರೂ ತಿಳಿಸುತ್ತಾರೆ. 10 ದೇವ
ಕುಮಾರನು ಪರಲೋಕದಿಂದ ಬರುವುದನ್ನು ಎದುರು
ನೋಡುವುದಕ್ಕಾಗಿ ನೀವು ಹಾಗೆ ಮಾಡಿದಿರಿ. ದೇವರೇ ಆ
ಕುಮಾರನನ್ನು ಸತ್ತವರೊಳಗಿಂದ ಜೀವಂತವಾಗಿ ಮೇಲ
ಕ್ಕೆಬ್ಬಿಸಿದನು. ಆತನೇ ಯೇಸು. ಮುಂದೆ ಬರುವ ದೇವರ
ಕೋಪದ ತೀರ್ಪಿನಿಂದ ನಮ್ಮನ್ನು ರಕ್ಷಿಸುವವನು ಆತನೇ.

## ಥೆಸಲೋನಿಕದಲ್ಲಿ ಪೌಲನ ಕಾರ್ಯ

2 ಸಹೋದರ ಸಹೋದರಿಯರೇ, ನಾವು ನಿಮ್ಮಲ್ಲಿಗೆ
ಬಂದದ್ದು ವ್ಯರ್ಥವಾಗಲಿಲ್ಲ ಎಂಬುದು ನಿಮಗೆ ತಿಳಿದಿದೆ.
2 ನಿಮ್ಮಲ್ಲಿಗೆ ಬರುವುದಕ್ಕೆ ಮೊದಲೇ ಫಿಲಿಪ್ಪಿಯಲ್ಲಿ ಹಿಂಸೆಯನ್ನು
ಅನುಭವಿಸಿದೆವು. ಅಲ್ಲಿಯ ಜನರು ನಮ್ಮ ವಿರುದ್ಧವಾಗಿ
ಕೆಟ್ಟದ್ದನ್ನು ಹೇಳಿದರು. ಅದೆಲ್ಲವೂ ನಿಮಗೆ ತಿಳಿದಿದೆ. ನಿಮ್ಮ
ಬಳಿಗೆ ಬಂದಾಗ, ಅನೇಕ ಜನರು ನಮಗೆ ವಿರುದ್ಧವಾಗಿದ್ದರು.
ಆದರೆ ಧೈರ್ಯದಿಂದ ಇರಲು ಮತ್ತು ನಿಮಗೆ ಸುವಾರ್ತೆಯನ್ನು
ತಿಳಿಸಲು ದೇವರು ನಮಗೆ ಸಹಾಯ ಮಾಡಿದನು. 3 ನಮ್ಮ
ಬೋಧನೆಯು ತಪ್ಪೂ ಅಲ್ಲ, ಮತ್ತು ಅಶುದ್ಧವಾದ ಉದ್ದೇಶ
ವನ್ನು ಹೊಂದಿಯೂ ಇಲ್ಲ, ಮತ್ತು ನಿಮ್ಮನ್ನು ಮೋಸಗೊಳಿಸುವ
ಪ್ರಯತ್ನವೂ ಅಲ್ಲ. 4 ನಾವು ಸುವಾರ್ತೆಯನ್ನು ತಿಳಿಸುತ್ತೇವೆ.
ಏಕೆಂದರೆ ದೇವರು ನಮ್ಮನ್ನು ಪರಿಶೋಧಿಸಿದ್ದಾನೆ ಮತ್ತು
ಸುವಾರ್ತೆಯನ್ನು ತಿಳಿಸಲು ನಮ್ಮನ್ನು ನೇಮಿಸಿದ್ದಾನೆ. ಆದು
ದರಿಂದ ಜನರನ್ನು ಮೆಚ್ಚಿಸಲು ಪ್ರಯತ್ನಿಸದೆ ನಮ್ಮ ಹೃದಯ
ಗಳನ್ನು ಪರೀಕ್ಷಿಸುವಾತನಾದ ದೇವರನ್ನೇ ಮೆಚ್ಚಿಸಲು ಪ್ರಯತ್ನಿ
ಸುತ್ತೇವೆ.

5 ನಿಮ್ಮ ಬಗ್ಗೆ ಒಳ್ಳೆಯದನ್ನು ಹೇಳಿ ನಿಮ್ಮನ್ನು ಮರಳು
ಮಾಡಬೇಕೆಂದು ನಾವೆಂದೂ ಪ್ರಯತ್ನಿಸಿಲ್ಲವೆಂಬುದು ನಿಮಗೆ
ತಿಳಿದಿದೆ. ನಾವು ನಿಮ್ಮ ಹಣವನ್ನು ಕಸಿದುಕೊಳ್ಳಲು ಪ್ರಯತ್ನಿ
ಸಿಲ್ಲ; ನಮ್ಮ ಸ್ವಾರ್ಥವನ್ನು ಮರೆಮಾಡಿಕೊಂಡು ವೇಶಧಾರಿಗಳಾ
ಗಿರಲಿಲ್ಲ. ಇದು ನಿಜವೆಂಬುದು ದೇವರಿಗೆ ತಿಳಿದಿದೆ. 6 ಜನರಿಂದ
ಬರುವ ಮಾನಮರ್ಯಾದೆಗಳನ್ನು ನಿಮ್ಮಿಂದಾಗಲಿ ಇತರ
ಜನರಿಂದಾಗಲಿ ನಾವೆಂದೂ ಬಯಸಲಿಲ್ಲ. 7 ನಾವು ಕ್ರಿಸ್ತನ
ಅಪೊಸ್ತಲರು. ನಾವು ನಿಮ್ಮೊಡನಿದ್ದಾಗ, ನಿಮ್ಮಿಂದ ದುಡಿಸಿ
ಕೊಳ್ಳಲು ನಮ್ಮ ಅಧಿಕಾರವನ್ನು ಬಳಸಬಹುದಾಗಿತ್ತು. ಆದರೆ
ನಿಮ್ಮೊಡನೆ ಬಹಳ ಸಾತ್ವಿಕರಾಗಿದ್ದೆವು. ತಾಯಿಯು ತನ್ನ ಸ್ವಂತ
ಚಿಕ್ಕ ಮಕ್ಕಳನ್ನು ಎಚ್ಚರಿಕೆಯಿಂದ ನೋಡಿಕೊಳ್ಳುವಂತೆ ನಾವು
ನಡೆದುಕೊಂಡೆವು. 8 ನಿಮ್ಮನ್ನು ಬಹಳವಾಗಿ ಪ್ರೀತಿಸಿದೆವು. ಆದು
ದರಿಂದ ದೇವರ ಸುವಾರ್ತೆಯನ್ನು ನಿಮ್ಮೊಡನೆ ಹಂಚಿಕೊಳ್ಳಲು,
ಮಾತ್ರವೇ ಅಲ್ಲ, ನಿಮಗೋಸ್ಕರ ಸ್ವಂತ ಪ್ರಾಣವನ್ನೇ ಕೊಡಲು
ಸಿದ್ಧರಾಗಿದ್ದೆವು. 9 ಸಹೋದರ ಸಹೋದರಿಯರೇ, ನಾವು
ಅನುಭವಿಸಿದ ಕಷ್ಟಕಾರ್ಪಣ್ಯಗಳು ನಿಮ್ಮ ನೆನಪಿನಲ್ಲೇ ಇವೆ.
ನಿಮಗೆ ದೇವರ ಸುವಾರ್ತೆಯನ್ನು ಉಪದೇಶಿಸಿದಾಗ ನೀವು
ನಮಗೆ ವೇತನ ನೀಡುವಂತೆ ನಿಮ್ಮ ಮೇಲೆ ಭಾರ ಹಾಕಬಾರ

ದೆಂದು ಹಗಲಿರುಳು ದುಡಿದು ಜೀವನ ಸಾಗಿಸಿದೆವು. 10ವಿಶ್ವಾಸಿ
ಗಳಾದ ನಿಮ್ಮೊಡನೆ ನಾವಿದ್ದಾಗ ತಪ್ಪಿಲ್ಲದವರಾಗಿಯೂ
ಪರಿಶುದ್ಧರಾಗಿಯೂ ಮತ್ತು ನಿರ್ದೋಷಿಗಳಾಗಿಯೂ ಜೀವಿ
ಸಿದ್ದೆವು. ಇದು ನಿಜವೆಂಬುದು ನಿಮಗೂ ತಿಳಿದಿದೆ ಮತ್ತು
ದೇವರಿಗೂ ತಿಳಿದಿದೆ. 11ತಂದೆಯು ತನ್ನ ಸ್ವಂತ ಮಕ್ಕಳೊಡನೆ
ನಡೆದುಕೊಳ್ಳುವಂತೆ ನಿಮ್ಮಲ್ಲಿ ಪ್ರತಿಯೊಬ್ಬರೊಡನೆಯೂ
ನಡೆದುಕೊಂಡೆವೆಂಬುದು ನಿಮಗೆ ತಿಳಿದಿದೆ. 12ನಿಮ್ಮನ್ನು ಬಲ
ಗೊಳಿಸಿದೆವು ಮತ್ತು ಸಂತೈಸಿದೆವು. ನಿಮ್ಮನ್ನು ತನ್ನ ರಾಜ್ಯಕ್ಕೂ
ಮಹಿಮೆಗೂ ಕರೆದ ದೇವರಿಗಾಗಿ ಯೋಗ್ಯವಾದ ರೀತಿಯಲ್ಲಿ
ಜೀವಿಸಿರಿ ಎಂದು ನಾವು ನಿಮಗೆ ತಿಳಿಸಿದೆವು. 13ನೀವು ದೇವರ
ಸಂದೇಶವನ್ನು ಸ್ವೀಕರಿಸಿಕೊಂಡದ್ದಕ್ಕಾಗಿ ದೇವರಿಗೆ ಯಾವಾ
ಗಲೂ ಕೃತಜ್ಞತಾಸ್ತುತಿ ಸಲ್ಲಿಸುತ್ತೇವೆ. ನೀವು ಆ ಸಂದೇಶವನ್ನು
ನಮ್ಮಿಂದ ಕೇಳಿ, ಅದನ್ನು ದೇವರ ವಾಕ್ಯದಂತೆ ಒಪ್ಪಿಕೊಂಡಿರೇ
ಹೊರತು ಮಾನವನ ವಾಕ್ಯಗಳೆಂದಲ್ಲ. ಅದು ನಿಜವಾಗಿಯೂ
ದೇವರ ಸಂದೇಶ. ಆ ಸಂದೇಶವು ನಂಬುವವರಾದ ನಿಮ್ಮಲ್ಲಿ
ಕಾರ್ಯಮಾಡುತ್ತದೆ. 14ಸಹೋದರ ಸಹೋದರಿಯರೇ,
ನೀವು ಜುದೇಯದಲ್ಲಿರುವ ದೇವರ ಸಭೆಗಳಂತಿದ್ದೀರಿ. ಕ್ರಿಸ್ತ
ಯೇಸುವಿನಲ್ಲಿ ವಿಶ್ವಾಸವಿಟ್ಟಿರುವ ಅವರು ಇತರ ಯೆಹೂದ್ಯ
ರಿಂದ ಹಿಂಸಿಸಲ್ಪಟ್ಟರು. ಅದೇ ರೀತಿಯಲ್ಲಿ ನೀವೂ ನಿಮ್ಮ
ದೇಶದ ಇತರ ಜನರಿಂದ ಹಿಂಸಿಸಲ್ಪಟ್ಟವರಾಗಿದ್ದೀರಿ. 15ಆ
ಯೆಹೂದ್ಯರು ಪ್ರಭುವಾದ ಯೇಸುವನ್ನೂ ಪ್ರವಾದಿಗಳನ್ನೂ
ಕೊಂದುಹಾಕಿದರು. ತಮ್ಮ ದೇಶದಿಂದ( ಜುದೇಯ) ನಮ್ಮನ್ನು
ಬಲವಂತವಾಗಿ ಹೊರಗಟ್ಟಿದರು. ಅವರು ದೇವರಿಗೆ ಮೆಚ್ಚಿಕೆ
ಯಾದ ಜನರಾಗಿರಲಿಲ್ಲ. ಅವರು ಜನರೆಲ್ಲರ ವಿರುದ್ಧವಾಗಿ
ದ್ದರು.

16ಹೌದು, ಯೆಹೂದ್ಯರಲ್ಲದವರಿಗೆ ರಕ್ಷಣೆ ನೀಡುವ
ಸುವಾರ್ತೆಯನ್ನು ನಾವು ಉಪದೇಶಿಸದಂತೆ ನಮ್ಮನ್ನು ತಡೆ
ಯಲು ಅವರು ಪ್ರಯತ್ನಿಸಿದರು. ಹೀಗೆ ಅವರು ತಮ್ಮ ಪಾಪ
ಗಳಿಗೆ ಮತ್ತಷ್ಟು ಪಾಪಗಳನ್ನು ಕೂಡಿಸುತ್ತಿದ್ದಾರೆ. ಕೊನೆಗೆ,
ದೇವರ ಕೋಪವು ಅವರ ಮೇಲೆ ಬರುತ್ತದೆ.

### ಥೆಸಲೋನಿಕದವರನ್ನು ಮತ್ತೆ ನೋಡಲು ಪೌಲನ ಆಸೆ

17ಸಹೋದರ ಸಹೋದರಿಯರೇ, ನಿಮ್ಮಿಂದ ಸ್ವಲ್ಪಕಾಲ
ಅಗಲಿಹೋಗಿದ್ದೆವು. (ನಾವು ನಿಮ್ಮೊಡನೆ ಇರಲಿಲ್ಲ, ಆದರೆ ನಮ್ಮ
ಆಲೋಚನೆಗಳು ನಿಮ್ಮೊಡನೆ ಇನ್ನೂ ಇವೆ.) ನಿಮ್ಮನ್ನು
ನೋಡಲು ಅತ್ಯಾಸೆಯಿಂದ ಬಹಳ ಪ್ರಯತ್ನಪಟ್ಟೆವು. 18ಹೌದು,
ನಾವು ನಿಮ್ಮಲ್ಲಿಗೆ ಬರಬೇಕೆಂದಿದ್ದೆವು. ಪೌಲನಾದ ನಾನು, ನಿಜ
ವಾಗಿಯೂ ಅನೇಕ ಸಲ ಬರಲು ಪ್ರಯತ್ನಿಸಿದೆನು, ಆದರೆ
ನಮ್ಮನ್ನು ಸೈತಾನನು ನಿಲ್ಲಿಸಿದನು. 19ನಮ್ಮ ಪ್ರಭುವಾದ ಯೇಸು
ಕ್ರಿಸ್ತನು ಪ್ರತ್ಯಕ್ಷನಾದಾಗ ನಾವು ಹೊಗಳಿಕೊಳ್ಳುವ ನಮ್ಮ
ನಿರೀಕ್ಷೆ, ನಮ್ಮ ಸಂತೋಷ, ನಮ್ಮ ಕಿರೀಟ ನೀವೇ ಆಗಿದ್ದೀರಿ.
20ನಿಜವಾಗಿಯೂ ನೀವೇ ನಮ್ಮ ಸಂತೋಷ ಮತ್ತು ಗೌರವ
ವಾಗಿದ್ದೀರಿ.

3 ನಾವು ನಿಮ್ಮ ಬಳಿಗೆ ಬರಲಾಗಲಿಲ್ಲ, ಆದರೆ ಇನ್ನು
ಹೆಚ್ಚುಕಾಲ ಕಾಯಲು ಬಹಳ ಕಷ್ಟಕರವಾಗಿದೆ.
2ಆದುದರಿಂದ ಅಥೆನ್ಸಿನಲ್ಲಿ ಉಳಿದುಕೊಂಡು ತಿಮೊಥೆ
ಯನನ್ನು ನಿಮ್ಮ ಬಳಿಗೆ ಕಳುಹಿಸಲು ತೀರ್ಮಾನಿಸಿದೆವು. ತಿಮೊಥೆ
ಯನು ನಮ್ಮ ಸಹೋದರ. ಅವನು ದೇವರಿಗೋಸ್ಕರ
ನಮ್ಮೊಡನೆ ಕೆಲಸ ಮಾಡುತ್ತಿದ್ದಾನೆ. ಕ್ರಿಸ್ತನ ವಿಷಯವಾದ
ಸುವಾರ್ತೆಯನ್ನು ಜನರಿಗೆ ತಿಳಿಸಲು ಅವನು ನಮಗೆ ಸಹಾಯ
ಮಾಡುತ್ತಿದ್ದಾನೆ. ನಿಮ್ಮ ನಂಬಿಕೆಯನ್ನು ಬಲಗೊಳಿಸಲು ಮತ್ತು
ನಿಮ್ಮನ್ನು ಸಂತೈಸಲು ತಿಮೊಥೆಯನನ್ನು ಕಳುಹಿಸಿದ್ದೇವೆ.
3ನಮಗೀಗ ಬಂದಿರುವ ಕಷ್ಟಗಳಿಂದ ನಿಮ್ಮಲ್ಲಿ ಯಾರೂ
ತಳಮಳಗೊಳ್ಳಬಾರದೆಂದು ತಿಮೊಥೆಯನನ್ನು ಕಳುಹಿಸಿದ್ದೇವೆ.
ನಮಗೆ ಇಂಥಾ ಕಷ್ಟಗಳು ಬರಲೇಬೇಕೆಂದು ನಿಮಗೇ ತಿಳಿದಿದೆ.
4ನಾವು ನಿಮ್ಮೊಡನಿದ್ದಾಗ, ನಾವೆಲ್ಲರೂ ಹಿಂಸೆಯನ್ನು ಅನು
ಭವಿಸಬೇಕಾಗುತ್ತದೆಯೆಂದು ನಿಮಗೆ ತಿಳಿಸಿದೆವು. ನಾವು ಹೇಳಿ
ದಂತೆಯೆ ಅದು ಸಂಭವಿಸಿತು ಎಂಬುದು ನಿಮಗೆ ತಿಳಿದಿದೆ.
5ನಿಮ್ಮ ನಂಬಿಕೆಯ ಬಗ್ಗೆ ತಿಳಿದುಕೊಳ್ಳಬೇಕೆಂಬ ಕಾರಣ
ದಿಂದಲೇ ನಾನು ತಿಮೊಥೆಯನನ್ನು ನಿಮ್ಮ ಬಳಿಗೆ ಕಳುಹಿಸಿದೆನು.
ಇನ್ನೂ ಹೆಚ್ಚುಕಾಲ ಕಾಯಲು ಸಾಧ್ಯವಿಲ್ಲವೆನಿಸಿದ್ದರಿಂದಲೇ
ನಾನು ಅವನನ್ನು ಕಳುಹಿಸಿದೆನು. ಜನರನ್ನು ಶೋಧನೆಗ ಒಳ
ಪಡಿಸುವ ಸೈತಾನನು ನಿಮ್ಮನ್ನು ಈಗಾಗಲೇ ಶೋಧನೆಗಳಿಂದ
ಸೋಲಿಸಿರಬಹುದೆಂಬ ಭಯ ನನಗಿತ್ತು. ಒಂದುವೇಳೆ,
ಹಾಗೇನಾದರೂ ಆಗಿದ್ದರೆ ನಮ್ಮ ಪ್ರಯಾಸವೆಲ್ಲಾ ನಿರರ್ಥಕ
ವಾಗುತ್ತಿತ್ತು. 6ಆದರೆ ತಿಮೊಥೆಯನು ನಿಮ್ಮಿಂದ ನಮ್ಮ ಬಳಿಗೆ
ಹಿಂತಿರುಗಿ ಬಂದಾಗ, ನಿಮ್ಮ ನಂಬಿಕೆಯ ಮತ್ತು ಪ್ರೀತಿಯ
ಬಗ್ಗೆ ಶುಭವಾರ್ತೆಯನ್ನು ನಮಗೆ ಹೇಳಿದನು. ನೀವು ಯಾವಾ
ಗಲೂ ನಮ್ಮನ್ನು ಜ್ಞಾಪಿಸಿಕೊಳ್ಳುವಿರೆಂತಲೂ ನಮ್ಮನ್ನು ಮತ್ತೆ
ನೋಡಲು ಅತ್ಯಾಸೆಯಿಂದ ಇದ್ದೀರೆಂತಲೂ ಅವನು ನಮಗೆ
ತಿಳಿಸಿದನು. ಅದೇ ರೀತಿಯಲ್ಲಿ ನಾವೂ ನಿಮ್ಮನ್ನು ನೋಡಲು
ಅತ್ಯಾಸೆಯಿಂದ ಇದ್ದೇವೆ. 7ಸಹೋದರ ಸಹೋದರಿಯರೇ,
ನಿಮ್ಮ ನಂಬಿಕೆಯ ದೆಸೆಯಿಂದ ನಿಮ್ಮ ವಿಷಯದಲ್ಲಿ ಸಂತೈಸಿ
ಕೊಂಡೆವು. ನಮಗೆ ಬಹಳ ತೊಂದರೆಯಿದ್ದರೂ ಹಿಂಸೆ
ಯಿದ್ದರೂ ಆದರಣೆಯಾಯಿತು. 8ನೀವು ಪ್ರಭುವಿನಲ್ಲಿ ಬಲ
ವಾಗಿದ್ದರೆ, ನಮ್ಮಲ್ಲಿ ಜೀವ ತುಂಬಿದಂತಿರುವುದು. 9ನಿಮ್ಮ
ನಿಮಿತ್ತದಿಂದ ದೇವರ ಸನ್ನಿಧಿಯಲ್ಲಿ ಬಹಳ ಹರ್ಷಿತರಾಗಿದ್ದೇವೆ!
ಆದ್ದರಿಂದ ನಿಮ್ಮ ವಿಷಯದಲ್ಲಿ ದೇವರಿಗೆ ಕೃತಜ್ಞತಾಸ್ತುತಿ ಸಲ್ಲಿಸು
ತ್ತೇವೆ. ನಮಗಿರುವ ಆನಂದಕ್ಕೆ ಸರಿಸಮವಾಗಿ ಕೃತಜ್ಞತಾಸ್ತುತಿ
ಸಲ್ಲಿಸಲು ನಮಗೆ ಹೇಗೆ ಸಾಧ್ಯವಾದೀತು? 10ಹಗಲಿರುಳು ನಿಮ್ಮ
ವಿಷಯದಲ್ಲಿ ಬಹಳವಾಗಿ ಪ್ರಾರ್ಥನೆ ಮಾಡುತ್ತಿದ್ದೇವೆ. ನಿಮ್ಮನ್ನು
ಕಣ್ಣಾರೆ ಕಂಡು ನಿಮ್ಮ ನಂಬಿಕೆಯಲ್ಲಿರುವ ಕುಂದುಕೊರತೆ
ಗಳನ್ನು ನಿವಾರಿಸಬೇಕೆಂದು ದೇವರಲ್ಲಿ ಹಗಲಿರುಳು ಪ್ರಾರ್ಥಿಸು
ತ್ತಿದ್ದೇವೆ.

11ನಾವು ನಿಮ್ಮ ಬಳಿಗೆ ಬರಲು ಮಾರ್ಗವನ್ನು ಸರಾಗ
ಗೊಳಿಸುವಂತೆ ನಮ್ಮ ತಂದೆಯಾದ ದೇವರಿಗೂ ಪ್ರಭುವಾದ
ಯೇಸುವಿಗೂ ಪ್ರಾರ್ಥಿಸುತ್ತೇವೆ. 12 ನಾವು ನಿಮ್ಮನ್ನು ಪ್ರೀತಿಸು
ವಂತೆ ನಿಮ್ಮ ಪ್ರೀತಿಯು ವೃದ್ಧಿಯಾಗಿ ಒಬ್ಬೊಬ್ಬರ ಮೇಲೆಯೂ
ಇತರ ಜನರೆಲ್ಲರ ಮೇಲೆಯೂ ಹೆಚ್ಚಾಗಲೆಂದು ಪ್ರಭುವಿನಲ್ಲಿ
ಪ್ರಾರ್ಥಿಸುತ್ತೇವೆ. 13ನಿಮ್ಮ ಹೃದಯಗಳು ಬಲಗೊಳ್ಳಲೆಂದು
ಹೀಗೆ ಪ್ರಾರ್ಥಿಸುತ್ತೇವೆ. ನಮ್ಮ ಪ್ರಭುವಾದ ಯೇಸುವು ತನ್ನ
ಪವಿತ್ರ ಜನರೊಂದಿಗೆ ಪ್ರತ್ಯಕ್ಷನಾದಾಗ ನೀವು ತಂದೆಯಾದ
ದೇವರ ಸನ್ನಿಧಿಯಲ್ಲಿ ಪರಿಶುದ್ಧರೂ ತಪ್ಪಿಲ್ಲದವರೂ
ಆಗಿರುವಿರಿ.

### ದೇವರನ್ನು ಹರ್ಷಗೊಳಿಸುವ ಜೀವನ

4 ಸಹೋದರ ಸಹೋದರಿಯರೇ, ಈಗ ನಿಮಗೆ ಇತರ
ಕೆಲವು ವಿಚಾರಗಳನ್ನು ತಿಳಿಸುತ್ತೇನೆ. ದೇವರನ್ನು ಮೆಚ್ಚಿ
ಸಲು ಹೇಗೆ ಜೀವಿಸಬೇಕೆಂದು ನಿಮಗೆ ಕಲಿಸಿದ್ದೇವೆ. ನೀವು ಅದೇ
ರೀತಿಯಲ್ಲಿ ಜೀವಿಸುತ್ತಿರುವಿರಿ. ಅದೇ ರೀತಿಯಲ್ಲಿ ಇನ್ನೂ ಹೆಚ್ಚು
ಸಮರ್ಪಕವಾಗಿ ಜೀವಿಸಬೇಕೆಂದು ನಾವು ನಿಮ್ಮನ್ನು ಕ್ರಿಸ್ತನಲ್ಲಿ
ಕೇಳಿಕೊಳ್ಳುತ್ತೇವೆ ಮತ್ತು ಪ್ರೋತ್ಸಾಹಿಸುತ್ತೇವೆ. 2ನೀವು ಯಾವ
ಕಾರ್ಯಗಳನ್ನು ಮಾಡಬೇಕೆಂದು ನಾವು ನಿಮಗೆ ಹೇಳಿದೆವೊ
ಅವುಗಳೆಲ್ಲಾ ನಿಮಗೆ ತಿಳಿದೇ ಇವೆ. ಪ್ರಭು ಯೇಸುವಿನ ಅಧಿಕಾರ
ದಿಂದ ನಾವು ಆ ಸಂಗತಿಗಳನ್ನು ನಿಮಗೆ ಹೇಳಿದೆವು. 3ನೀವು
ಪವಿತ್ರರಾಗಿರಬೇಕೆಂಬುದು ದೇವರ ಚಿತ್ತವಾಗಿದೆ. ಆದು
ದರಿಂದ ನೀವು ಲೈಂಗಿಕ ಪಾಪಗಳಿಂದ ದೂರವಿರಿ. 4ನಿಮ್ಮಲ್ಲಿ
ಪ್ರತಿಯೊಬ್ಬರೂ ನಿಮ್ಮ ಸ್ವಂತ ದೇಹಗಳನ್ನು ಹತೋಟಿಯಲ್ಲಿ
ಇಟ್ಟುಕೊಳ್ಳಬೇಕೆಂಬುದು ದೇವರ ಅಪೇಕ್ಷೆ. ನಿಮ್ಮ ದೇಹವನ್ನು
ಪವಿತ್ರವಾದ ಮಾರ್ಗದಲ್ಲಿ ಬಳಸಿದರೆ, ದೇವರಿಗೆ ಗೌರವವನ್ನು
ನೀಡಿದಂತಾಗುವುದು. * 5ನಿಮ್ಮ ದೇಹವನ್ನು ಲೈಂಗಿಕ ಪಾಪಗಳಿ
ಗಾಗಿ ಬಳಸಬೇಡಿ. ದೇವರನ್ನು ತಿಳಿಯದ ಜನರು ತಮ್ಮ ದೇಹ
ಗಳನ್ನು ಅದಕ್ಕೆ ಬಳಸುತ್ತಾರೆ. 6ಈ ವಿಷಯದಲ್ಲಿ ನಿಮ್ಮಲ್ಲಿ
ಯಾರೂ ಕ್ರಿಸ್ತನಲ್ಲಿ ಸಹೋದರನಾದವನಿಗೆ ಕೇಡು ಮಾಡ
ಬಾರದು ಮತ್ತು ವಂಚಿಸಬಾರದು. ನಾವು ಈಗಾಗಲೇ ನಿಮಗೆ
ಹೇಳಿದಂತೆ ಮತ್ತು ಎಚ್ಚರಿಕೆ ನೀಡಿದಂತೆ ಇವೆಲ್ಲವುಗಳ ವಿಷಯ
ದಲ್ಲಿ ದೇವರು ದಂಡಿಸುತ್ತಾನೆ. 7ದೇವರು ನಮ್ಮನ್ನು ಪರಿಶುದ್ಧ
ರಾಗಿ ಜೀವಿಸುವುದಕ್ಕೆ ಕರೆದಿದ್ದಾನೆ. ನಾವು ಪಾಪದಲ್ಲಿ ಜೀವಿಸಲು
ಆತನು ಇಷ್ಟಪಡುವುದಿಲ್ಲ. 8ಆದುದರಿಂದ ಈ ಉಪದೇಶವನ್ನು
ಅನುಸರಿಸದವನು ಅವಿಧೇಯನಾಗಿರುವುದು ದೇವರಿಗೇ
ಹೊರತು ಮಾನವನಿಗಲ್ಲ. ನಮಗೆ ತನ್ನ ಪವಿತ್ರಾತ್ಮನನ್ನು ನೀಡಿ
ದಾತನು ದೇವರೇ. 9ಕ್ರಿಸ್ತನಲ್ಲಿ ಸಹೋದರ ಸಹೋದರಿಯ
ರನ್ನು ಹೇಗೆ ಪ್ರೀತಿಸಬೇಕೆಂಬುದರ ಬಗ್ಗೆ ನಾವು ನಿಮಗೆ
ಬರೆಯುವ ಅವಶ್ಯಕತೆಯಿಲ್ಲ. ಒಬ್ಬರನ್ನೊಬ್ಬರು ಹೇಗೆ ಪ್ರೀತಿಸ
ಬೇಕೆಂಬುದನ್ನು ಈಗಾಗಲೇ ದೇವರು ನಿಮಗೆ ಕಲಿಸಿದ್ದಾನೆ.
10ಮಕೆದೋನಿಯದಲ್ಲಿರುವ ಸಹೋದರ ಸಹೋದರಿಯ
ರನ್ನೆಲ್ಲ ನೀವು ನಿಜವಾಗಿಯೂ ಪ್ರೀತಿಸುತ್ತಿದ್ದೀರಿ. ಅವರನ್ನು
ಇನ್ನೂ ಹೆಚ್ಚೆಚ್ಚಾಗಿ ನೀವು ಪ್ರೀತಿಸಬೇಕೆಂದು ನಾವು ನಿಮ್ಮನ್ನು
ಪ್ರೋತ್ಸಾಹಿಸುತ್ತೇವೆ. 11ಶಾಂತಿಯಿಂದ ಜೀವಿಸಲು ನಿಮ್ಮಿಂದಾ
ದಷ್ಟು ಪ್ರಯತ್ನಿಸಿರಿ. ನಿಮ್ಮ ಸ್ವಂತ ವ್ಯವಹಾರದ ಮೇಲ್ವಿಚಾರಣೆ
ಯನ್ನು ನೋಡಿಕೊಳ್ಳಿ. ನಿಮ್ಮ ಕೈಯಾರೆ ಕೆಲಸ ಮಾಡಬೇಕೆಂದು
ನಾವು ಈಗಾಗಲೇ ನಿಮಗೆ ಹೇಳಿದ್ದೇವೆ. 12ನೀವು ಹೀಗೆ
ಮಾಡಿದರೆ, ವಿಶ್ವಾಸಿಗಳಲ್ಲದವರು ನಿಮ್ಮ ಜೀವಿತದ ರೀತಿಯನ್ನು
ಕಂಡು ನಿಮ್ಮನ್ನು ಗೌರವಿಸುತ್ತಾರೆ. ಅಲ್ಲದೆ ನಿಮ್ಮ ಅಗತ್ಯತೆಗಳ
ಪೂರೈಕೆಗಾಗಿ ನೀವು ಬೇರೆಯವರನ್ನು ಅವಲಂಬಿಸಿಕೊಳ್ಳುವ
ಅವಶ್ಯಕತೆಯೂ ಇರುವುದಿಲ್ಲ.

### ಪ್ರಭುವಿನ ಬರುವಿಕೆ

13 ಸಹೋದರ ಸಹೋದರಿಯರೇ, ಸತ್ತುಹೋದ ಜನರ
ಬಗ್ಗೆ ನೀವು ತಿಳಿದುಕೊಳ್ಳಬೇಕೆಂಬುದು ನಮ್ಮ ಅಪೇಕ್ಷೆ.
ನಿರೀಕ್ಷೆಯಿಲ್ಲದ ಜನರಂತೆ ನೀವು ದುಃಖದಿಂದಿರುವುದು ನಮಗೆ
ಇಷ್ಟವಿಲ್ಲ. 14ಯೇಸು ಸತ್ತುಹೋದನೆಂದು ನಾವು ನಂಬುತ್ತೇವೆ.
ಆದರೆ ಯೇಸು ಮತ್ತೆ ಜೀವಂತವಾಗಿ ಎದ್ದುಬಂದನೆಂಬುದನ್ನೂ
ನಾವು ನಂಬುತ್ತೇವೆ. ಹಾಗೆಯೇ ಯೇಸುವಿನಲ್ಲಿ ವಿಶ್ವಾಸವಿಟ್ಟು
ಸತ್ತುಹೋದವರನ್ನು ದೇವರು ಆತನ ಜೊತೆಯಲ್ಲಿ ಕರೆದು
ಕೊಂಡು ಬರುವನು. 15ಈಗ ನಾವು ನಿಮಗೆ ಹೇಳುತ್ತಿರುವುದು
ಪ್ರಭುವಿನ ಸ್ವಂತ ಸಂದೇಶವನ್ನೇ. ಪ್ರಭುವು ಮತ್ತೆ ಬಂದಾಗ ಈಗ
ಜೀವಿಸುತ್ತಿರುವ ನಾವು ಇನ್ನೂ ಜೀವದಿಂದ ಇದ್ದರೆ ನಾವು
ಪ್ರಭುವಿನ ಜೊತೆಯಲ್ಲಿರುತ್ತೇವೆ. ಆದರೂ ಸತ್ತುಹೋದ ಇತರ
ರಿಗಿಂತಲೂ ನಾವು ಮುಂದಿನವರಾಗುವುದಿಲ್ಲ. 16ಪ್ರಭುವು
ತಾನೇ ಪರಲೋಕದಿಂದ ಇಳಿದುಬರುವನು. ಆಗ ಪ್ರಧಾನ
ದೇವದೂತನು ದೇವರ ತುತೂರಿ ಧ್ವನಿಯೊಡನೆ ಆಜ್ಞಾಘೋಷ
ಮಾಡುವನು. ಕೂಡಲೇ ಕ್ರಿಸ್ತನಲ್ಲಿರುವ ಸತ್ತವರು ಮೊದಲು
ಎದ್ದುಬರುವರು. 17ಅನಂತರ, ಇನ್ನೂ ಜೀವದಿಂದುಳಿದಿರುವ
ನಾವು ಸತ್ತವರೊಡನೆ ಒಂದುಗೂಡುವೆವು. ಪ್ರಭುವನ್ನು
ಅಂತರಿಕ್ಷದಲ್ಲಿ ಎದುರುಗೊಳ್ಳಲು ನಾವು ಮೇಘಗಳ ನಡುವೆ
ಎತ್ತಲ್ಪಡುವೆವು. ಹೀಗೆ ನಾವು ಯಾವಾಗಲೂ ಪ್ರಭುವಿನೊಂದಿಗೆ
ಇರುವೆವು. 18ಆದಕಾರಣ ಈ ಮಾತುಗಳಿಂದ ಒಬ್ಬರನ್ನೊಬ್ಬರು
ಸಂತೈಸಿರಿ.

### ಪ್ರಭುವು ಪ್ರತ್ಯಕ್ಷನಾಗುವಾಗ ಸಿದ್ಧರಾಗಿರಿ

5 ಸಹೋದರ ಸಹೋದರಿಯರೇ, ಈಗ ನಾವು ಕಾಲ ಮತ್ತು
ದಿನಗಳ ಬಗ್ಗೆ ನಿಮಗೆ ಬರೆಯುವ ಅವಶ್ಯವಿಲ್ಲ. 2ಪ್ರಭುವು
ಪ್ರತ್ಯಕ್ಷನಾಗುವ ದಿನವು ರಾತ್ರಿಕಾಲದಲ್ಲಿ ಕಳ್ಳನು ಬರುವಂತೆ
ಇದ್ದಕ್ಕಿದ್ದಂತೆ ಬರುತ್ತದೆ ಎಂಬುದು ನಿಮಗೆಲ್ಲ ಚೆನ್ನಾಗಿ ತಿಳಿದಿದೆ.
3‘‘ನಮಗೆ ಶಾಂತಿಯಿದೆ, ನಾವು ಸುರಕ್ಷಿತರಾಗಿದ್ದೇವೆ’’ ಎಂದು
ಜನರು ಹೇಳುವಾಗಲೇ ಅವರಿಗೆ ವಿನಾಶವು ಗರ್ಭಿಣಿಗೆ ಪ್ರಸವ
ವೇದನೆ ಉಂಟಾಗುವಂತೆ ಬರುತ್ತದೆ. ಆ ಜನರು ತಪ್ಪಿಸಿಕೊಳ್ಳ
ಲಾಗುವುದಿಲ್ಲ. 4ಆದರೆ ಸಹೋದರ ಸಹೋದರಿಯರೇ, ನೀವು
ಕತ್ತಲಿನಲ್ಲಿ (ಪಾಪದಲ್ಲಿ) ವಾಸಿಸುತ್ತಿಲ್ಲ. ಆ ದಿನವು ನಿಮಗೆ
ಕಳ್ಳನಂತೆ ಇದ್ದಕ್ಕಿದ್ದಂತೆ ಬರುವುದಿಲ್ಲ. 5ನೀವೆಲ್ಲರೂ ಬೆಳಕಿಗೆ
ಸೇರಿದವರು. ನೀವು ಹಗಲಿಗೆ ಸೇರಿದವರು. ನಾವು ರಾತ್ರಿಗಾಗಲಿ
ಅಥವಾ ಕತ್ತಲೆಗಾಗಲಿ ಸೇರಿದವರಲ್ಲ. 6ಆದುದರಿಂದ ನಾವು
ಇತರ ಜನರಂತಿರಬಾರದು. ನಾವು ನಿದ್ರೆ ಮಾಡುವುದೇ ಬೇಡ.
ನಾವು ಎಚ್ಚರದಿಂದ ಇದ್ದು, ನಮ್ಮನ್ನು ಹತೋಟಿಯಲ್ಲಿ ಇಟ್ಟು
ಕೊಂಡಿರಬೇಕು. 7ನಿದ್ದೆ ಮಾಡುವ ಜನರು ರಾತ್ರಿಯಲ್ಲಿ ನಿದ್ರಿಸು
ತ್ತಾರೆ. ಕುಡಿದು ಅಮಲೇರುವವರು ರಾತ್ರಿಯಲ್ಲಿ ಕುಡಿದು
ಅಮಲೇರುತ್ತಾರೆ. 8ಆದರೆ ನಾವು ಹಗಲಿಗೆ ಸೇರಿದವರಾದ್ದ
ರಿಂದ ನಮ್ಮನ್ನು ಹತೋಟಿಯಲ್ಲಿ ಇಟ್ಟುಕೊಳ್ಳಬೇಕು. ನಾವು
ನಮ್ಮನ್ನು ರಕ್ಷಿಸಿಕೊಳ್ಳುವುದಕ್ಕಾಗಿ ಪ್ರೀತಿಯನ್ನೂ ನಂಬಿಕೆ
ಯನ್ನೂ ಧರಿಸಿಕೊಳ್ಳಬೇಕು. ರಕ್ಷಣೆಯ ನಿರೀಕ್ಷೆಯು ನಮಗೆ
ಶಿರಸ್ತ್ರಾಣವಾಗಿರಬೇಕು. 9ದೇವರು ನಮ್ಮನ್ನು ಆರಿಸಿಕೊಂಡದ್ದು
ತನ್ನ ಕೋಪಕ್ಕೆ ಗುರಿಯಾಗಲಿ ಎಂದಲ್ಲ. ಪ್ರಭುವಾದ ಯೇಸು
ಕ್ರಿಸ್ತನ ಮೂಲಕ ನಮಗೆ ರಕ್ಷಣೆಯಾಗಲೆಂದೇ ದೇವರು
ನಮ್ಮನ್ನು ಆರಿಸಿಕೊಂಡನು. 10ನಾವು ತನ್ನೊಂದಿಗೆ ಜೀವಿಸ
ಲೆಂದು ಯೇಸು ನಮಗಾಗಿ ಸತ್ತನು. ಯೇಸು ಪ್ರತ್ಯಕ್ಷನಾದಾಗ,
ನಾವು ಜೀವಿಸಿರುತ್ತೇವೊ ಇಲ್ಲವೆ ಸತ್ತಿರುತ್ತೇವೊ ಎಂಬುದು

---

**ವಚನ 4** ಅಥವಾ ‘‘ನಮ್ಮಲ್ಲಿ ಪ್ರತಿಯೊಬ್ಬರಿಗೂ ಪರಿಶುದ್ಧವಾದ ಮತ್ತು ಗೌರವಾನ್ವಿತವಾದ ರೀತಿಯಲ್ಲಿ ತನ್ನ ಸ್ವಂತ ಹೆಂಡತಿಯನ್ನು ಪಡೆದುಕೊಳ್ಳಲು ಗೊತ್ತಿದೆ,’’

ಮುಖ್ಯವಲ್ಲ. [11]ಆದ್ದರಿಂದ ಒಬ್ಬರನ್ನೊಬ್ಬರು ಸಂತೈಸಿ ಬಲ
ಪಡಿಸಿರಿ. ಈಗ ನೀವು ಮಾಡುತ್ತಿರುವುದು ಅದನ್ನೇ.

### ಕೊನೆಯ ಮಾತುಗಳು ಮತ್ತು ವಂದನೆಗಳು

[12]ಸಹೋದರ ಸಹೋದರಿಯರೇ, ಈಗ ನಿಮ್ಮಲ್ಲಿ ಪ್ರಯಾಸ
ದಿಂದ ಕೆಲಸ ಮಾಡುತ್ತಾ ನಿಮ್ಮನ್ನು ಪ್ರಭುವಿನ ಮಾರ್ಗದಲ್ಲಿ
ನಡೆಸುವವರನ್ನು ಮತ್ತು ಉಪದೇಶಿಸುವವರನ್ನು ಗೌರವಿಸ
ಬೇಕೆಂದು ನಿಮ್ಮನ್ನು ಕೇಳಿಕೊಳ್ಳುತ್ತೇವೆ. [13]ಅವರು ನಿಮ್ಮಲ್ಲಿ
ಮಾಡುವ ಸೇವೆಗಾಗಿ ಅವರನ್ನು ವಿಶೇಷವಾದ ಪ್ರೀತಿಯಿಂದ
ಗೌರವಿಸಿರಿ. ನೀವೆಲ್ಲರೂ ಸಮಾಧಾನದಿಂದ ಜೀವಿಸಿರಿ.
[14]ಸಹೋದರ ಸಹೋದರಿಯರೇ, ಕೆಲಸ ಮಾಡದೆ ಇರುವ
ಜನರಿಗೆ ಎಚ್ಚರಿಕೆ ನೀಡಬೇಕೆಂದು ನಾವು ನಿಮ್ಮನ್ನು ಕೇಳಿಕೊಳ್ಳು
ತ್ತೇವೆ. ಹೆದರಿಕೊಂಡಿರುವವರನ್ನು ಪ್ರೋತ್ಸಾಹಿಸಿರಿ; ಬಲಹೀನ
ರಿಗೆ ಸಹಾಯ ಮಾಡಿ; ಎಲ್ಲರ ಜೊತೆಯಲ್ಲಿ ತಾಳ್ಮೆಯಿಂದಿರಿ;
[15]ಯಾರೂ ಅಪಕಾರಕ್ಕೆ ಅಪಕಾರ ಮಾಡದಂತೆ ನೋಡಿ
ಕೊಳ್ಳಿರಿ; ಒಬ್ಬರಿಗೊಬ್ಬರಿಗೆ ಮತ್ತು ಎಲ್ಲರಿಗೆ ಯಾವಾಗಲೂ
ಒಳ್ಳೆಯದನ್ನು ಮಾಡಲು ಪ್ರಯತ್ನಿಸಿರಿ. [16]ಯಾವಾಗಲೂ
ಸಂತೋಷದಿಂದಿರಿ. [17]ಎಡೆಬಿಡದೆ ಪ್ರಾರ್ಥಿಸಿರಿ. [18]ದೇವರಿಗೆ
ಎಲ್ಲಾ ಕಾಲದಲ್ಲಿಯೂ ಕೃತಜ್ಞತೆಗಳನ್ನು ಸಲ್ಲಿಸಿರಿ. ಇದುವೇ
ನಿಮ್ಮ ವಿಷಯವಾಗಿ ಯೇಸು ಕ್ರಿಸ್ತನಲ್ಲಿ ತೋರಿಬಂದ ದೇವರ
ಚಿತ್ತ. [19]ಪವಿತ್ರಾತ್ಮನ ಕಾರ್ಯವನ್ನು ನಿಂದಿಸಬೇಡಿ.
[20]ಪ್ರವಾದನೆಯನ್ನು ಹೀನೈಸಬೇಡಿ. [21]ಎಲ್ಲವನ್ನೂ ಪರಿ
ಶೋಧಿಸಿ, ಒಳ್ಳೆಯದನ್ನು ಭದ್ರವಾಗಿ ಹಿಡಿದುಕೊಳ್ಳಿರಿ. [22]ಎಲ್ಲಾ
ವಿಧವಾದ ಕೆಟ್ಟತನದಿಂದ ದೂರವಾಗಿರಿ. [23]ಶಾಂತಿದಾಯಕ
ನಾದ ದೇವರು ತಾನೇ ನಿಮ್ಮನ್ನು ಸಂಪೂರ್ಣವಾಗಿ ಪರಿಶುದ್ಧ
ಗೊಳಿಸಲೆಂದು ಪ್ರಾರ್ಥಿಸುತ್ತೇವೆ. ಪ್ರಭುವಾದ ಯೇಸು ಕ್ರಿಸ್ತನು
ಪ್ರತ್ಯಕ್ಷನಾದಾಗ ನಿಮ್ಮ ಆತ್ಮ, ಶರೀರ, ಪ್ರಾಣಗಳು ದೋಷ
ರಹಿತವಾಗಿರಲೆಂದು ಪ್ರಾರ್ಥಿಸುತ್ತೇವೆ. [24]ನಿಮ್ಮನ್ನು ಕರೆಯು
ವಾತನೇ ಅದನ್ನು ನಿಮಗಾಗಿ ಮಾಡುತ್ತಾನೆ. ಆತನು ನಂಬಿ
ಗಸ್ತನು.

[25]ಸಹೋದರ ಸಹೋದರಿಯರೇ, ದಯಮಾಡಿ ನಮಗಾಗಿ
ಪ್ರಾರ್ಥಿಸಿರಿ. [26]ಸಹೋದರ ಸಹೋದರಿಯರನ್ನು ಸಂಧಿಸಿದಾಗ
ಪವಿತ್ರವಾದ ಮುದ್ದಿಟ್ಟು ವಂದಿಸಿರಿ. [27]ಈ ಪತ್ರವನ್ನು ಸಹೋದರ
ಸಹೋದರಿಯರಿಗೆಲ್ಲಾ ಓದಿ ತಿಳಿಸಬೇಕೆಂದು ನಾನು ನಿಮಗೆ
ಪ್ರಭುವಿನ ಅಧಿಕಾರದಿಂದ ಹೇಳುತ್ತಿದ್ದೇನೆ. [28]ಪ್ರಭು ಯೇಸು
ಕ್ರಿಸ್ತನ ಕೃಪೆಯು ನಿಮ್ಮೊಡನೆ ಇರಲಿ.

# ಥೆಸಲೋನಿಕದವರಿಗೆ ಬರೆದ ಎರಡನೆ ಪತ್ರ

1 ತಂದೆಯಾದ ದೇವರಲ್ಲಿಯೂ ಮತ್ತು ಪ್ರಭುವಾದ ಯೇಸು
ಕ್ರಿಸ್ತನಲ್ಲಿಯೂ ಇರುವ ಥೆಸಲೋನಿಕದವರ ಸಭೆಗೆ
ಪೌಲನು, ಸಿಲ್ವಾನನು, ಮತ್ತು ತಿಮೊಥೆಯನು ಬರೆಯುವ ಪತ್ರ.
2ತಂದೆಯಾದ ದೇವರ ಮತ್ತು ಪ್ರಭುವಾದ ಯೇಸು ಕ್ರಿಸ್ತನ
ಕೃಪೆಯೂ ಶಾಂತಿಯೂ ನಿಮಗಿರಲಿ. 3ನಿಮ್ಮ ವಿಷಯದಲ್ಲಿ
ಯಾವಾಗಲೂ ದೇವರಿಗೆ ಸ್ತೋತ್ರ ಸಲ್ಲಿಸುತ್ತೇವೆ. ನಿಮ್ಮ
ನಂಬಿಕೆಯು ಮತ್ತು ಇತರರ ಮೇಲೆ ನಿಮಗಿರುವ ಪ್ರೀತಿಯು
ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ನಿಮ್ಮ ವಿಷಯದಲ್ಲಿ
ಸ್ತೋತ್ರ ಸಲ್ಲಿಸುವುದು ಯೋಗ್ಯವಾದ ಕಾರ್ಯವಾಗಿದೆ.
4ದೇವರ ಇತರ ಸಭೆಗಳಲ್ಲಿ ನಿಮ್ಮನ್ನು ಕುರಿತು ಹೆಚ್ಚಳಪಡುತ್ತೇವೆ.
ನಿಮ್ಮಲ್ಲಿರುವ ನಂಬಿಕೆ ಮತ್ತು ಸಹನೆಗಳನ್ನು ಕುರಿತು ಇತರ
ಸಭೆಗಳಿಗೆ ಹೇಳುತ್ತೇವೆ. ನೀವು ಹಿಂಸೆಗೆ ಒಳಗಾಗಿದ್ದರೂ ಅನೇಕ
ಸಂಕಟಗಳನ್ನು ಅನುಭವಿಸುತ್ತಿದ್ದರೂ ನಂಬಿಕೆಯಿಂದಲೂ
ಸಹನೆಯಿಂದಲೂ ಜೀವಿಸುತ್ತಿದ್ದೀರಿ.

### ದೇವರ ತೀರ್ಪನ್ನು ಕುರಿತು ಪೌಲನ ವಿವರಣೆ

5ದೇವರು ನ್ಯಾಯವಾದ ತೀರ್ಪನ್ನು ನೀಡುತ್ತಾನೆಂಬುದಕ್ಕೆ
ಅದೇ ಪ್ರಮಾಣವಾಗಿದೆ. ದೇವರ ರಾಜ್ಯಕ್ಕೆ ನೀವು ಯೋಗ್ಯ
ರಾಗಿರಬೇಕೆಂಬುದು ಆತನ ಅಪೇಕ್ಷೆ. ನೀವು ಹಿಂಸೆಪಡು
ತ್ತಿರುವುದು ಆ ರಾಜ್ಯಕ್ಕೋಸ್ಕರವೇ. 6ದೇವರು ಯೋಗ್ಯವಾದು
ದ್ದನ್ನೇ ಮಾಡುತ್ತಾನೆ. ನಿಮಗೆ ತೊಂದರೆ ಕೊಡುವ ಜನರಿಗೆ
ದೇವರು ತೊಂದರೆ ಕೊಡುತ್ತಾನೆ. 7ತೊಂದರೆಗೆ ಒಳಗಾಗಿರುವ
ನಿಮಗೆ ದೇವರು ಶಾಂತಿಯನ್ನು ನೀಡುತ್ತಾನೆ. ಆತನು ನಮಗೂ
ಶಾಂತಿಯನ್ನು ನೀಡುವನು. ಪ್ರಭುವಾದ ಯೇಸು ತನ್ನ ಶಕ್ತಿಶಾಲಿ
ಗಳಾದ ದೂತರೊಂದಿಗೆ ಪರಲೋಕದಿಂದ ಪ್ರತ್ಯಕ್ಷನಾದಾಗ ಈ
ಶಾಂತಿಯನ್ನು ದಯಪಾಲಿಸುತ್ತಾನೆ. 8ಪ್ರಭು ಯೇಸು ಪರ
ಲೋಕದಿಂದ ಬೆಂಕಿಯ ಜ್ವಾಲೆಗಳೊಡನೆ ಪ್ರತ್ಯಕ್ಷನಾದಾಗ
ದೇವರನ್ನು ತಿಳಿದಿಲ್ಲದವರಿಗೂ ಸುವಾರ್ತೆಗೆ ವಿಧೇಯರಾಗಿಲ್ಲ
ದವರಿಗೂ ದಂಡನೆಯನ್ನು ಬರಮಾಡುತ್ತಾನೆ. 9ಅವರಿಗೆ ನಿತ್ಯ
ವಾದ ದಂಡನೆಯಾಗುವುದು. ಪ್ರಭುವಿನೊಂದಿಗಿರಲು ಅವರಿಗೆ
ಅವಕಾಶ ದೊರೆಯುವುದಿಲ್ಲ. ಆತನು ತನ್ನ ಮಹಾಶಕ್ತಿಯಿಂದ
ಅವರನ್ನು ದೂರವಿರಿಸುತ್ತಾನೆ. 10ಪ್ರಭುವಾದ ಯೇಸು ಪ್ರತ್ಯಕ್ಷ
ನಾದಾಗ ಇದು ಸಂಭವಿಸುತ್ತದೆ. ಆತನು ತನಗೆ ದೊರೆಯ
ಬೇಕಾದ ವೈಭವವನ್ನು ಸ್ವೀಕರಿಸಲು ತನ್ನ ಪರಿಶುದ್ಧ ಜನ
ರೊಂದಿಗೆ ಪ್ರತ್ಯಕ್ಷನಾಗುತ್ತಾನೆ. ಆತನನ್ನು ನಂಬಿದ ಜನರೆಲ್ಲರೂ
ಆತನನ್ನು ಕಂಡು ಆಶ್ಚರ್ಯಚಕಿತರಾಗುವರು. ನಾವು ಹೇಳಿ
ದ್ದನ್ನು ನಂಬಿದ ನೀವೆಲ್ಲರೂ ವಿಶ್ವಾಸಿಗಳ ಆ ಸಮೂಹ
ದಲ್ಲಿರುವಿರಿ. 11ಆದಕಾರಣವೇ ಯಾವಾಗಲೂ ನಿಮಗಾಗಿ
ಪ್ರಾರ್ಥಿಸುತ್ತೇವೆ. ಯಾವ ಒಳ್ಳೆಯ ಮಾರ್ಗದಲ್ಲಿ ನೀವು
ಜೀವಿಸಬೇಕೆಂದು ದೇವರು ನಿಮ್ಮನ್ನು ಕರೆದನೋ, ಆ
ಮಾರ್ಗದಲ್ಲೇ ನೀವು ಜೀವಿಸಲಿಕ್ಕಾಗುವಂತೆ ಪ್ರಾರ್ಥಿಸುತ್ತೇವೆ.
ನಿಮ್ಮಲ್ಲಿರುವ ಒಳ್ಳೆಯ ತನವು ಒಳ್ಳೆಯದನ್ನು ಮಾಡುವಂತೆ
ನಿಮ್ಮನ್ನು ಪ್ರೇರೇಪಿಸುತ್ತದೆ. ನಿಮ್ಮಲ್ಲಿರುವ ನಂಬಿಕೆಯು
ನಿಮ್ಮಿಂದ ಕಾರ್ಯಸಾಧಿಸುತ್ತದೆ. ಈ ಕಾರ್ಯಗಳನ್ನು ನೀವು
ಹೆಚ್ಚುಹೆಚ್ಚಾಗಿ ಮಾಡಲು ದೇವರು ತನ್ನ ಶಕ್ತಿಯಿಂದ ನಿಮಗೆ
ಸಹಾಯಮಾಡಲೆಂದು ಬೇಡಿಕೊಳ್ಳುತ್ತೇವೆ. 12ನಮ್ಮ ಪ್ರಭು
ವಾದ ಯೇಸು ಕ್ರಿಸ್ತನ ಹೆಸರು ನಿಮ್ಮಲ್ಲಿ ಮಹಿಮೆ ಹೊಂದಲೆಂದು
ಮತ್ತು ನೀವೂ ಆತನಲ್ಲಿ ಮಹಿಮೆ ಹೊಂದಲೆಂದು ನಾವು
ಪ್ರಾರ್ಥಿಸುತ್ತೇವೆ. ಆ ಮಹಿಮೆಯು ನಮ್ಮ ದೇವರ ಮತ್ತು ಪ್ರಭು
ಯೇಸು ಕ್ರಿಸ್ತನ ಕೃಪೆಯಿಂದ ಬರುತ್ತದೆ.

### ಕೆಟ್ಟಕಾರ್ಯಗಳು ಸಂಭವಿಸುವವು

2 ಸಹೋದರ ಸಹೋದರಿಯರೇ, ನಮ್ಮ ಪ್ರಭುವಾದ
ಯೇಸು ಕ್ರಿಸ್ತನು ಪ್ರತ್ಯಕ್ಷನಾಗುವುದನ್ನು ಕುರಿತು ಕೆಲವು
ಮಾತುಗಳನ್ನು ಹೇಳಬೇಕಾಗಿದೆ.ನಾವೆಲ್ಲರೂ ಒಟ್ಟಾಗಿ ಸೇರಿ
ಆತನನ್ನು ಸಂಧಿಸುವ ಕಾಲವನ್ನು ಕುರಿತು ನಿಮ್ಮೊಡನೆ ಮಾತ
ನಾಡಲು ಇಚ್ಛಿಸುತ್ತೇವೆ. 2ಪ್ರಭುವಿನ ದಿನವು ಈಗಾಗಲೇ
ಬಂದುಬಿಟ್ಟಿತು ಎಂದು ಯಾರಾದರು ನಿಮಗೆ ಹೇಳಿದರೆ ಆ
ಕೂಡಲೇ ಕಳವಳಗೊಳ್ಳಬೇಡಿ ಅಥವಾ ಭಯಪಡಬೇಡಿ.
ಯಾವನಾದರೂ ತನ್ನ ಪ್ರವಾದನೆಯಲ್ಲಾಗಲಿ ಉಪದೇಶ
ದಲ್ಲಾಗಲಿ ಹಾಗೆ ಹೇಳುವ ಸಾಧ್ಯತೆ ಇದೆ. ಯಾವನಾದರೂ
ಸುಳ್ಳುಪತ್ರವನ್ನೇ ನಮ್ಮ ಹೆಸರಿನಲ್ಲಿ ತಾನೇ ಬರೆದು ನಿಮ್ಮ
ಮುಂದೆ ಓದಿ ತಿಳಿಸುವ ಸಾಧ್ಯತೆಯೂ ಇದೆ. 3ಯಾರೂ ಯಾವ
ವಿಧದಲ್ಲಿಯೂ ನಿಮ್ಮನ್ನು ಮೋಸಗೊಳಿಸಲು ಅವಕಾಶ ನೀಡ
ದಿರಿ. ಜನರು ದೇವರಿಗೆ ವಿಮುಖರಾಗದ ಹೊರತು, ಅಧರ್ಮ
ಸ್ವರೂಪನು ಕಾಣಿಸಿಕೊಳ್ಳದ ಹೊರತು ಆ ದಿನವು ಬರುವುದಿಲ್ಲ.
4ದೇವರೆಂದು ಕರೆಸಿಕೊಳ್ಳುವ ಏನನ್ನೇ ಆಗಲಿ, ಜನರು ಪೂಜಿ
ಸುವ ಯಾವುದನ್ನೇ ಆಗಲಿ ಅಧರ್ಮಸ್ವರೂಪನು ವಿರೋಧಿಸಿ,
ಅವುಗಳಿಗಿಂತ ತನ್ನನ್ನು ತಾನೇ ಹೆಚ್ಚಿಸಿಕೊಂಡು ದೇವರ ಆಲಯ
ದೊಳಕ್ಕೆ ಹೋಗಿ ಕುಳಿತುಕೊಂಡು ತಾನೇ ದೇವರೆಂದು
ಹೇಳಿಕೊಳ್ಳುತ್ತಾನೆ.
5ಈ ಸಂಗತಿಗಳೆಲ್ಲವೂ ಸಂಭವಿಸುತ್ತವೆಯೆಂದು ನಾನು
ನಿಮಗೆ ಮೊದಲೇ ತಿಳಿಸಿದ್ದೇನೆ. ಜ್ಞಾಪಕವಿಲ್ಲವೇ? 6ಈಗ
ಅಧರ್ಮಸ್ವರೂಪನನ್ನು ತಡೆಹಿಡಿದಿರುವುದು ಯಾವು
ದೆಂಬುದು ನಿಮಗೆ ತಿಳಿದಿದೆ. ಅವನು ತಕ್ಕಕಾಲದಲ್ಲಿ ಬರಲೆಂದೇ

ಅವನನ್ನು ಈಗ ತಡೆಹಿಡಿಯಲಾಗಿದೆ. [7]ರಹಸ್ಯವಾದ ದುಷ್ಟ
ಶಕ್ತಿಯು ಈಗಾಗಲೇ ಪ್ರಪಂಚದಲ್ಲಿ ತನ್ನ ಕಾರ್ಯವನ್ನು
ಸಾಧಿಸುತ್ತಾ ಇದೆ. ಆದರೆ ಆ ರಹಸ್ಯವಾದ ದುಷ್ಟಶಕ್ತಿಯನ್ನು
ತಡೆಹಿಡಿಯುವ ಒಬ್ಬಾತನಿದ್ದಾನೆ. ಆತನು ತೆಗೆದುಬಿಡಲ್ಪಟ್ಟ
ಕೂಡಲೇ [8]ಅಧರ್ಮಸ್ವರೂಪನು ಕಾಣಿಸಿಕೊಳ್ಳುತ್ತಾನೆ. ಪ್ರಭು
ವಾದ ಯೇಸು ಅವನನ್ನು ತನ್ನ ಬಾಯಿಯ ಉಸಿರಿನಿಂದಲೇ
ಕೊಲ್ಲುವನು; ತನ್ನ ಪ್ರತ್ಯಕ್ಷತೆಯ ಮಹಿಮೆಯಿಂದ ನಾಶಪಡಿಸು
ವನು. [9]ಆ ಅದರ್ಮಸ್ವರೂಪನು ಸೈತಾನನ ಮಹಾಶಕ್ತಿಯಿಂದ
ಕೂಡಿದವನಾಗಿರುತ್ತಾನೆ. ಅವನು ಅನೇಕ ಮೋಸದ ಪವಾಡ
ಗಳನ್ನು , ಸೂಚಕ ಕಾರ್ಯಗಳನ್ನು , ಅದ್ಭುತ ಕಾರ್ಯಗಳನ್ನು
ಮಾಡುತ್ತಾನೆ. [10]ಸತ್ಯವನ್ನು ಪ್ರೀತಿಸದೆ ತಪ್ಪಿಹೋಗಿರುವ
ಜನರನ್ನು ಮೋಸಗೊಳಿಸಲು, ಅವನು ಎಲ್ಲಾ ವಿಧವಾದ
ತಂತ್ರಗಳನ್ನು ಮಾಡುವನು.(ಅವರು ಸತ್ಯವನ್ನು ಪ್ರೀತಿಸಿದ್ದರೆ,
ರಕ್ಷಣೆ ಹೊಂದುತ್ತಿದ್ದರು.) [11]ಆದರೆ ಆ ಜನರು ಸತ್ಯವನ್ನು
ಪ್ರೀತಿಸಲಿಲ್ಲ. ಆದಕಾರಣ, ಸತ್ಯವನ್ನು ತೊರೆದು, ಸತ್ಯವಲ್ಲದ್ದನ್ನು
ನಂಬುವಂತೆ ಮಾಡುವ ಶಕ್ತಿಯೊಂದನ್ನು ದೇವರು ಅವರ ಬಳಿಗೆ
ಕಳುಹಿಸುತ್ತಾನೆ. [12]ಸತ್ಯವನ್ನು ನಂಬದೆ, ಕೆಟ್ಟಕಾರ್ಯಗಳನ್ನು
ಮಾಡುವುದರಲ್ಲಿ ಸಂತೋಷಪಡುವ ಜನರೆಲ್ಲರೂ ದಂಡನೆಗೆ
ಒಳಗಾಗುವರು.

### ರಕ್ಷಣೆಗಾಗಿ ನೀವು ಆರಿಸಲ್ಪಟ್ಟಿರುವಿರಿ

[13]ಸಹೋದರ ಸಹೋದರಿಯರೇ, ಪ್ರಭುವು ನಿಮ್ಮನ್ನು
ಪ್ರೀತಿಸುತ್ತಾನೆ. ನಿಮ್ಮನ್ನು ರಕ್ಷಿಸಬೇಕೆಂದು ದೇವರು ನಿಮ್ಮನ್ನು
ಆದಿಯಲ್ಲಿಯೇ ಆರಿಸಿಕೊಂಡನು. ಆದ್ದರಿಂದ ನಿಮ್ಮ ವಿಷಯ
ದಲ್ಲಿ ದೇವರಿಗೆ ಯಾವಾಗಲೂ ಕೃತಜ್ಞತೆ ಸಲ್ಲಿಸಬೇಕು. ನಿಮ್ಮನ್ನು
ಪರಿಶುದ್ಧರನ್ನಾಗಿ ಮಾಡುವ ಪವಿತ್ರಾತ್ಮನಿಂದ ಮತ್ತು ಸತ್ಯದ
ಮೇಲೆ ನಿಮಗಿರುವ ನಂಬಿಕೆಯಿಂದ ನೀವು ರಕ್ಷಣೆ ಹೊಂದಿ
ದ್ದೀರಿ. [14]ನೀವು ರಕ್ಷಣೆಯನ್ನು ಹೊಂದಿಕೊಂಡು ನಮ್ಮ ಪ್ರಭು
ವಾದ ಯೇಸು ಕ್ರಿಸ್ತನ ಮಹಿಮೆಯಲ್ಲಿ ಪಾಲುಗಾರರಾಗ
ಬೇಕೆಂದು, ನಾವು ಸಾರಿದ ಸುವಾರ್ತೆಯ ಮೂಲಕ ದೇವರು
ನಿಮ್ಮನ್ನು ಕರೆದನು. [15]ಸಹೋದರ ಸಹೋದರಿಯರೇ, ದೃಢ
ವಾಗಿರಿ. ನಾವು ಮಾತಿನ ಮೂಲಕ ಮತ್ತು ಪತ್ರಗಳ ಮೂಲಕ
ನಿಮಗೆ ತಿಳಿಸಿದ ಬೋಧನೆಗಳನ್ನು ನಂಬಿಕೊಂಡೇ ಇರಿ.

[16-17]ನೀವು ಹೇಳುವ ಒಳ್ಳೆಯ ಸಂಗತಿಗಳಲ್ಲಿ ಮತ್ತು
ಮಾಡುವ ಒಳ್ಳೆಯ ಕಾರ್ಯಗಳಲ್ಲಿ ನಿಮಗೆ ಬಲವನ್ನೂ
ಆದರಣೆಯನ್ನೂ ಪ್ರಭುವಾದ ಯೇಸು ಕ್ರಿಸ್ತನು ಮತ್ತು ತಂದೆ
ಯಾದ ದೇವರು ನಿಮಗೆ ದಯಪಾಲಿಸಲಿ ಎಂದು ನಾವು
ಪ್ರಾರ್ಥಿಸುತ್ತೇವೆ. ದೇವರು ನಮ್ಮನ್ನು ಪ್ರೀತಿಸಿದನು. ಆತನು ತನ್ನ
ಕೃಪೆಯಿಂದಲೇ ನಮಗೆ ಒಳ್ಳೆಯ ನಿರೀಕ್ಷೆಯನ್ನೂ ಶಾಶ್ವತವಾದ
ಆದರಣೆಯನ್ನೂ ದಯಪಾಲಿಸಿದನು.

### ನಮಗೋಸ್ಕರ ಪ್ರಾರ್ಥಿಸಿ

3 ಸಹೋದರ ಸಹೋದರಿಯರೇ, ನಮಗೋಸ್ಕರ
ಪ್ರಾರ್ಥಿಸಿರಿ. ಪ್ರಭುವಿನ ಉಪದೇಶವು ತ್ವರಿತಗತಿಯಲ್ಲಿ
ಹಬ್ಬಲೆಂದು ಪ್ರಾರ್ಥಿಸಿರಿ. ನಿಮ್ಮಂತೆಯೇ ಇತರ ಜನರು ಈ
ಉಪದೇಶವನ್ನು ಗೌರವಿಸುವಂತೆ ಪ್ರಾರ್ಥಿಸಿ. [2]ಕೆಟ್ಟವರಾದ
ಮತ್ತು ದುಷ್ಟರಾದ ಜನರ ಕೈಯಿಂದ ನಮ್ಮನ್ನು ರಕ್ಷಿಸುವಂತೆ
ದೇವರಲ್ಲಿ ಪ್ರಾರ್ಥಿಸಿ. (ಪ್ರಭುವಿನಲ್ಲಿ ಜನರೆಲ್ಲರೂ ನಂಬಿಕೆ
ಯಿಟ್ಟಿಲ್ಲ.) [3]ಆದರೆ ಪ್ರಭುವು ನಂಬಿಗಸ್ತನು. ಆತನು ನಿಮ್ಮನ್ನು
ಬಲಗೊಳಿಸುವನು ಮತ್ತು ಕೆಡುಕನಿಂದ (ಸೈತಾನನಿಂದ)
ನಿಮ್ಮನ್ನು ರಕ್ಷಿಸುವನು. [4]ನಾವು ನಿಮಗೆ ತಿಳಿಸಿದ ಸಂಗತಿಗಳನ್ನು
ನೀವು ಮಾಡುತ್ತಿದ್ದೀರೆಂಬ ಭರವಸೆಯನ್ನು ಪ್ರಭುವೇ ನಮಗೆ
ಕೊಟ್ಟಿದ್ದಾನೆ. ನೀವು ಇನ್ನು ಮುಂದೆಯೂ ಇವುಗಳನ್ನು
ಮಾಡುವಿರೆಂದು ನಮಗೆ ತಿಳಿದದೆ. [5]ದೇವರ ಪ್ರೀತಿಯ ಕಡೆಗೂ
ಮತ್ತು ಕ್ರಿಸ್ತನ ತಾಳ್ಮೆಯ ಕಡೆಗೂ ನಿಮ್ಮ ಹೃದಯಗಳನ್ನು
ಪ್ರಭುವೇ ಮುನ್ನಡೆಸಲಿ ಎಂದು ನಾವು ಪ್ರಾರ್ಥಿಸುತ್ತೇವೆ.

### ಪ್ರತಿಯೊಬ್ಬರು ದುಡಿಯಲಿ

[6]ಸಹೋದರ ಸಹೋದರಿಯರೇ, ಕೆಲಸ ಮಾಡದ ವಿಶ್ವಾಸಿ
ಯಿಂದ ನೀವು ದೂರವಿರಬೇಕೆಂದು ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಅಧಿಕಾರದಿಂದ ನಿಮಗೆ ಆಜ್ಞಾಪಿಸುತ್ತಿದ್ದೇವೆ . ನಾವು
ನೀಡಿದ ಉಪದೇಶವನ್ನು ಅವರು ಅನುಸರಿಸುವುದಿಲ್ಲ. [7]ನಾವು
ಜೀವಿಸುವಂತೆಯೇ ನೀವೂ ಜೀವಿಸಬೇಕೆಂದು ನಿಮಗೆ ಗೊತ್ತಿದೆ.
ನಾವು ನಿಮ್ಮ ಜೊತೆಯಲ್ಲಿದ್ದಾಗ ಸೋಮಾರಿಗಳಾಗಿರಲಿಲ್ಲ;
[8]ಹಣಕೊಡದೆ ಯಾರ ಬಳಿಯಲ್ಲಿಯೂ ಊಟ ಮಾಡಲಿಲ್ಲ.
ನಿಮ್ಮಲ್ಲಿ ಯಾರಿಗೂ ತೊಂದರೆಯಾಗಬಾರದೆಂದು ಹಗಲಿ
ರುಳು ಎಡಬಿಡದೆ ಕೆಲಸ ಮಾಡಿದೆವು. [9]‘‘ನಮಗೆ ಸಹಾಯ
ಮಾಡಿ’’ ಎಂದು ನಿಮ್ಮನ್ನು ಕೇಳಲು ನಮಗೆ ಹಕ್ಕಿತ್ತು. ಆದರೆ
ನಮ್ಮ ಪೋಷಣೆಗೆ ಬೇಕಾದದ್ದನ್ನು ನಾವೇ ದುಡಿದು ಸಂಪಾದಿ
ಸಿದೆವು, ಏಕೆಂದರೆ ನಿಮಗೆ ಮಾದರಿಯಾಗಬೇಕೆಂದಿದ್ದೆವು.
[10]ನಾವು ನಿಮ್ಮ ಸಂಗಡವಿದ್ದಾಗ,‘‘ಕೆಲಸ ಮಾಡದವನು ಊಟ
ವನ್ನೂ ಮಾಡಕೂಡದು’’ ಎಂಬ ನಿಯಮವನ್ನು ವಿಧಿಸಿದೆವು.

[11]ನಿಮ್ಮಲ್ಲಿ ಕೆಲವರು ಯಾವ ಕೆಲಸವನ್ನೂ ಮಾಡದೆ ಇತರರ
ಜೀವನದಲ್ಲಿ ಆಸಕ್ತರಾಗಿದ್ದಾರೆ ಎಂಬುದನ್ನು ಕೇಳಿದ್ದೇವೆ.
[12]ತಮ್ಮ ಕೆಲಸವನ್ನು ತಾವು ನೋಡಿಕೊಳ್ಳುವಂತೆ ಅವರಿಗೆ
ಆಜ್ಞಾಪಿಸುತ್ತಿದ್ದೇವೆ. ಅವರೇ ದುಡಿದು ತಮ್ಮ ಆಹಾರವನ್ನು
ಸಂಪಾದಿಸಿಕೊಳ್ಳಬೇಕೆಂದು ಆಜ್ಞಾಪಿಸಿ ಪ್ರಭುವಾದ ಯೇಸು
ಕ್ರಿಸ್ತನಲ್ಲಿ ಬೇಡಿಕೊಳ್ಳುತ್ತೇವೆ.

[13]ಸಹೋದರ ಸಹೋದರಿಯರೇ, ಒಳ್ಳೆಯದನ್ನು ಮಾಡುವು
ದರಲ್ಲಿ ಎಂದಿಗೂ ಬೇಸರಗೊಳ್ಳಬೇಡಿ.

[14]ಈ ಪತ್ರದ ಮೂಲಕ ನಿಮಗೆ ತಿಳಿಸಿರುವ ಮಾತುಗಳಿಗೆ
ಯಾವನಾದರೂ ವಿಧೇಯನಾಗದಿದ್ದರೆ, ಅವನು ಯಾರೆಂಬು
ದನ್ನು ಜ್ಞಾಪಕದಲ್ಲಿಟ್ಟುಕೊಂಡಿರಿ. ಅವನ ಸಹವಾಸಮಾಡ
ಬೇಡಿ. ಆಗ ಅವನಿಗೆ ನಾಚಿಕೆ ಆಗಬಹುದು. [15]ಆದರೆ ಅವನನ್ನು
ವೈರಿಯೆಂದು ಎಣಿಸದೆ ಸಹೋದರನೆಂದು ಎಣಿಸಿಕೊಂಡು
ಬುದ್ಧಿ ಹೇಳಿರಿ.

### ಕೊನೆಯ ಮಾತುಗಳು

[16]ಶಾಂತಿದಾಯಕನಾದ ಪ್ರಭುವು ಎಲ್ಲಾ ಕಾಲಗಳಲ್ಲಿಯೂ
ಮತ್ತು ಎಲ್ಲಾ ವಿಧದಲ್ಲಿಯೂ ನಿಮಗೆ ಶಾಂತಿಯನ್ನು ದಯ
ಪಾಲಿಸಲಿ. ಪ್ರಭುವು ನಿಮ್ಮೆಲ್ಲರೊಂದಿಗಿರಲಿ.

[17]ಪೌಲನಾದ ನಾನು ಈಗ ನನ್ನ ಕೈಬರಹದಿಂದ ಈ ಪತ್ರವನ್ನು
ಮುಕ್ತಾಯಗೊಳಿಸುತ್ತೇನೆ. ನನ್ನ ಪತ್ರಗಳಿಗೆಲ್ಲಾ ಇದೇ ನನ್ನ
ಗುರುತು. ಇದೇ ನನ್ನ ಕೈ ಬರಹ. [18]ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಕೃಪೆಯು ನಿಮ್ಮೆಲ್ಲರೊಂದಿಗಿರಲಿ.

# ತಿಮೊಥೆಯನಿಗೆ ಬರೆದ ಮೊದಲನೆ ಪತ್ರ

1 ಕ್ರಿಸ್ತಯೇಸುವಿನ ಅಪೊಸ್ತಲನಾದ ಪೌಲನು ತಿಮೊಥೆ
ಯನಿಗೆ ಬರೆಯುವ ಪತ್ರ. ನಮ್ಮ ರಕ್ಷಕನಾದ ದೇವರ ಮತ್ತು
ನಮ್ಮ ನಿರೀಕ್ಷೆಗೆ ಆಧಾರವಾದ ಕ್ರಿಸ್ತಯೇಸುವಿನ ಆಜ್ಞೆಗನು
ಸಾರವಾಗಿ ನಾನು ಅಪೊಸ್ತಲನಾದೆನು.

2 ನೀನು ನಂಬಿಕೆ ಉಳ್ಳವನಾಗಿರುವುದರಿಂದ ನನಗೆ ನಿಜವಾದ
ಮಗನಂತಿರುವೆ.

ತಂದೆಯಾದ ದೇವರಿಂದ ಮತ್ತು ನಮ್ಮ ಪ್ರಭುವಾದ ಕ್ರಿಸ್ತ
ಯೇಸುವಿನಿಂದ ಕೃಪೆಯೂ ಕರುಣೆಯೂ ಶಾಂತಿಯೂ ನಿನಗೆ
ಲಭಿಸಲಿ.

### ದುರ್ಬೋಧನೆಗಳ ವಿರುದ್ಧ ಎಚ್ಚರಿಕೆ

3 ನಾನು ಮಕೆದೋನಿಯಕ್ಕೆ ಹೋಗುವಾಗ, ನೀನು ಎಫೆಸ
ದಲ್ಲೇ ಇರು ಎಂದು ನಿನಗೆ ತಿಳಿಸಿದ್ದೆ. ಯಾಕೆಂದರೆ ಕೆಲವರು
ಅಲ್ಲಿ ಸುಳ್ಳುಸಂಗತಿಗಳನ್ನು ಉಪದೇಶಿಸುತ್ತಿದ್ದಾರೆ. ನೀನು
ಅದನ್ನು ನಿಲ್ಲಿಸಬೇಕು. 4 ಕಲ್ಪನಾಕಥೆಗಳಿಗೂ ಕೊನೆಯಿಲ್ಲದ
ವಂಶಾವಳಿಗಳಿಗೂ ಗಮನಕೊಡಬಾರದೆಂದು ಅವರಿಗೆ ಆಜ್ಞಾ
ಪಿಸು. ಆ ಸಂಗತಿಗಳು ವಾದವಿವಾದಗಳನ್ನು ಮಾತ್ರ ತರುತ್ತವೆ.
ಅವುಗಳಿಂದ ದೇವರ ಕಾರ್ಯಕ್ಕೆ ಪ್ರಯೋಜನವೇನೂ ಇಲ್ಲ.
ದೇವರ ಕಾರ್ಯವನ್ನು ನಂಬಿಕೆಯಿಂದ ಮಾಡಬೇಕು.
5 ಪ್ರೀತಿಯೇ ಈ ಆಜ್ಞೆಯ ಗುರಿಯಾಗಿದೆ. ಈ ಪ್ರೀತಿಯನ್ನು
ಹೊಂದಿಕೊಳ್ಳಲು ಜನರು ಶುದ್ಧಹೃದಯ ಉಳ್ಳವರಾಗಿರ
ಬೇಕು; ಯೋಗ್ಯವಾದ ಕಾರ್ಯವನ್ನೇ ಮಾಡುವವರಾಗಿರ
ಬೇಕು; ಮತ್ತು ನಿಷ್ಕಪಟವಾದ ನಂಬಿಕೆಯನ್ನು ಹೊಂದಿದವ
ರಾಗಿರಬೇಕು. 6 ಕೆಲವರು ಈ ಗುರಿತಪ್ಪಿ ನಿರರ್ಥಕವಾದ
ವಿಷಯಗಳನ್ನು ಕುರಿತು ಮಾತಾಡುತ್ತಿದ್ದಾರೆ. 7 ತಾವು
ಧರ್ಮೋಪದೇಶಕರಾಗಬೇಕೆಂಬುದು ಅವರ ಅಪೇಕ್ಷೆ. ಆದರೆ
ತಾವು ಏನು ಮಾತಾಡುತ್ತಿದ್ದೇವೆ ಎಂಬುದೇ ಅವರಿಗೆ ತಿಳಿದಿಲ್ಲ.
ತಮಗೆ ಖಚಿತವಾಗಿ ತಿಳಿದಿದೆ ಎಂದು ತಾವು ಹೇಳುವ ಸಂಗತಿ
ಗಳನ್ನೂ ಅವರು ಅರ್ಥಮಾಡಿಕೊಳ್ಳುವುದಿಲ್ಲ.

8 ಧರ್ಮಶಾಸ್ತ್ರವು ಒಳ್ಳೆಯದೇ. ಆದರೆ ಅದನ್ನು ನಿಷ್ಠೆಯಿಂದ
ಅನುಸರಿಸಬೇಕು. 9 ಧರ್ಮಶಾಸ್ತ್ರವನ್ನು ರೂಪಿಸಿದ್ದು ಒಳ್ಳೆಯ
ವರಿಗಾಗಿಯಲ್ಲ ಎಂಬುದು ನಮಗೆ ತಿಳಿದಿದೆ. ಅದನ್ನು
ರೂಪಿಸಿದ್ದು ಅದರ ವಿರುದ್ಧವಾಗಿ ನಡೆಯುವ ಮತ್ತು ಅದನ್ನು
ಅನುಸರಿಸಲು ಒಪ್ಪದಿರುವ ಜನರಿಗಷ್ಟೇ. ದೇವರಿಗೆ ವಿರುದ್ಧ
ವಾದ ಜನರಿಗೆ, ಮತ್ತು ಪಾಪಿಷ್ಠರಿಗೆ, ಅಧರ್ಮಿಗಳಿಗೆ ಮತ್ತು
ಪರಿಶುದ್ಧರಲ್ಲದವರಿಗೆ, ತಂದೆತಾಯಿಗಳನ್ನು ಕೊಲ್ಲುವವರಿಗೆ
ಮತ್ತು ಕೊಲೆಗಾರರಿಗೆ, 10 ಲೈಂಗಿಕ ಪಾಪಗಳನ್ನು ಮಾಡು
ವವರಿಗೆ, ಸಲಿಂಗಕಾಮಿಗಳಿಗೆ, ಗುಲಾಮರನ್ನು ಮಾರಾಟ
ಮಾಡುವವರಿಗೆ, ಸುಳ್ಳನ್ನು ಹೇಳುವವರಿಗೆ, ಒಪ್ಪಂದವನ್ನು
ಮೀರುವ ಜನರಿಗೆ, ದೇವರ ಸತ್ಯೋಪದೇಶಕ್ಕೆ ವಿರುದ್ಧವಾಗಿ
ಏನನ್ನು ಬೇಕಾದರೂ ಮಾಡುವವರಿಗೆ ಅದನ್ನು ರೂಪಿಸ
ಲಾಗಿದೆ. 11 ಈ ಉಪದೇಶವು ಜನರಿಗೆ ತಿಳಿಸುವುದಕ್ಕಾಗಿ
ದೇವರು ನನಗೆ ಕೊಟ್ಟ ಸುವಾರ್ತೆಯ ಒಂದು ಭಾಗವಾಗಿದೆ
ಭಾಗ್ಯವಂತನಾದ ದೇವರಿಂದಲೇ ಈ ಮಹಿಮೆಯ
ಸುವಾರ್ತೆಯು ಬಂದಿತು.

### ದೇವರ ಕರುಣೆಗಾಗಿ ಕೃತಜ್ಞತೆಗಳು

12 ನಮ್ಮ ಪ್ರಭುವಾದ ಕ್ರಿಸ್ತಯೇಸು ನನ್ನ ಮೇಲಿನ ನಂಬಿಕೆ
ಯಿಂದ, ಆತನ ಸೇವೆ ಮಾಡುವ ಈ ಕಾರ್ಯವನ್ನು ನನಗೆ
ದಯಪಾಲಿಸಿದ್ದರಿಂದ ನಾನು ಆತನಿಗೆ ಕೃತಜ್ಞತೆಗಳನ್ನು ಸಲ್ಲಿಸು
ತ್ತೇನೆ. ಆತನು ನನ್ನನ್ನು ಬಲಪಡಿಸುತ್ತಾನೆ. 13 ಮೊದಲು, ನಾನು
ಕ್ರಿಸ್ತನ ವಿರುದ್ಧ ಮಾತನಾಡಿದ್ದೆನು. ಆತನನ್ನು ಹಿಂಸಿಸಿದ್ದೆನು. ಆತ
ನಿಗೆ ನೋವಾಗುವಂಥ ಕಾರ್ಯಗಳನ್ನು ಮಾಡಿದ್ದೆನು. ಆದರೆ
ನಾನೇನು ಮಾಡುತ್ತಿದ್ದೇನೆಂಬುದು ನನಗೆ ತಿಳಿದಿರಲಿಲ್ಲವಾದ್ದ
ರಿಂದ ದೇವರು ನನಗೆ ಕರುಣೆ ತೋರಿದನು. ನಂಬದಿರುವಾಗ
ನಾನು ಅವುಗಳನ್ನು ಮಾಡಿದೆನು. 14 ಆದರೆ ನಮ್ಮ ಪ್ರಭುವಿನ
ಕೃಪೆಯು ಸಂಪೂರ್ಣವಾಗಿ ನನಗೆ ಲಭಿಸಿತು. ಕ್ರಿಸ್ತಯೇಸುವಿ
ನಲ್ಲಿರುವ ನಂಬಿಕೆ ಮತ್ತು ಪ್ರೀತಿಗಳು ಆ ಕೃಪೆಯೊಂದಿಗೆ
ಬಂದವು.

15 ನಾನು ಹೇಳುತ್ತಿರುವ ಈ ಸಂಗತಿ ಸತ್ಯವಾದದ್ದು. ಆದ್ದರಿಂದ
ನೀವು ಅದನ್ನು ಸಂಪೂರ್ಣವಾಗಿ ಒಪ್ಪಿಕೊಳ್ಳಬೇಕು. ಅದೇ
ನಂದರೆ: ಪಾಪಿಗಳನ್ನು ರಕ್ಷಿಸುವುದಕ್ಕೆ ಕ್ರಿಸ್ತಯೇಸು ಈ
ಲೋಕದಲ್ಲಿ ಪ್ರತ್ಯಕ್ಷನಾದನು. ಆ ಪಾಪಿಗಳಲ್ಲಿ ನಾನೇ
ಮುಖ್ಯನು. 16 ಆದರೆ ನನಗೆ ಕರುಣೆ ದೊರೆಯಿತು. ಕ್ರಿಸ್ತಯೇಸು
ತನ್ನ ಅಮಿತವಾದ ತಾಳ್ಮೆಯನ್ನು ನನ್ನಲ್ಲಿ ತೋರ್ಪಡಿಸು
ವುದಕ್ಕಾಗಿಯೇ ನನಗೆ ಕರುಣೆಯನ್ನು ದಯಪಾಲಿಸಿದನು. ಪಾಪಿ
ಗಳಲ್ಲೆಲ್ಲಾ ಮುಖ್ಯನಾಗಿದ್ದ ನನಗೆ ಕ್ರಿಸ್ತನು ತನ್ನ ತಾಳ್ಮೆಯನ್ನು
ತೋರಿದನು. ನಿತ್ಯಜೀವಕ್ಕಾಗಿ ಕ್ರಿಸ್ತನಲ್ಲಿ ನಂಬಿಕೆಯನ್ನಿಡುವ
ಜನರಿಗೆ ನಾನು ದೃಷ್ಟಾಂತವಾಗಿರಬೇಕೆಂದೇ ಆತನು ನನ್ನನ್ನು
ಕರುಣಿಸಿದನು. 17 ಸದಾಕಾಲ ಆಳುವ ಅರಸನಿಗೆ ಗೌರವವೂ
ಮಹಿಮೆಯೂ ಇರಲಿ. ಆತನಿಗೆ ಲಯವೆಂಬುದೇ ಇಲ್ಲ. ಆತನು
ಅದೃಶ್ಯನಾಗಿರುವನು. ಒಬ್ಬನೇ ದೇವರಾದ ಆತನಿಗೆ ಗೌರವವೂ
ಮಹಿಮೆಯೂ ಉಂಟಾಗಲಿ. ಆಮೆನ್.

18 ತಿಮೊಥೆಯನೇ, ನೀನು ನನಗೆ ಮಗನಂತಿರುವೆ. ನಾನು
ನಿನಗೆ ಆಜ್ಞಾಪಿಸುವುದೇನಂದರೆ, ಮೊದಲು ನಿನ್ನ ವಿಷಯದಲ್ಲಿ
ತಿಳಿಸಲಾದ ಪ್ರವಾದನೆಗಳಿಗೆ ಅನುಗುಣವಾಗಿ ನಂಬಿಕೆಯ ದಿವ್ಯ

ಹೋರಾಟವನ್ನು ಮಾಡು. 19ನಂಬಿಕೆಯು ನಿನ್ನಲ್ಲಿ ಅಚಲ
ವಾಗಿರಲಿ, ನಿನಗೆ ಯೋಗ್ಯವೆನಿಸಿದ್ದನ್ನೇ ಮಾಡು. ಕೆಲವು ಜನರು
ಹೀಗೆ ಮಾಡಲಿಲ್ಲ. ಅವರ ನಂಬಿಕೆಯೆಲ್ಲವೂ ನಾಶವಾಯಿತು.
20ಹುಮೆನಾಯನು ಮತ್ತು ಅಲೆಗ್ಸಾಂಡರನು ಹಾಗೆ ಮಾಡಿ
ದರು. ದೇವರ ವಿರುದ್ಧವಾಗಿ ಮಾತನಾಡಕೂಡದೆಂದು ಅವರು
ತಿಳಿದುಕೊಳ್ಳಲೆಂದೇ ಅವರನ್ನು ಸೈತಾನನಿಗೆ ಒಪ್ಪಿಸಿದೆನು.

## ಪ್ರಾರ್ಥನೆ ಮತ್ತು ಸಭಾಕೂಟಗಳ ಬಗ್ಗೆ ಕೆಲವು ಸಲಹೆಗಳು

2 ಮೊಟ್ಟ ಮೊದಲನೆಯದಾಗಿ, ನಾನು ನಿಮಗೆ ಹೇಳುವು
ದೇನಂದರೆ, ಎಲ್ಲಾ ಜನರಿಗಾಗಿ ದೇವರಲ್ಲಿ ಪ್ರಾರ್ಥಿಸಿರಿ,
ವಿಜ್ಞಾಪಿಸಿರಿ, ಅವರ ಅಗತ್ಯಕ್ಕೆ ತಕ್ಕಂತೆ ಬಿನ್ನಹ ಮಾಡಿರಿ, ಮತ್ತು
ಆತನಿಗೆ ಕೃತಜ್ಞತಾಸ್ತುತಿ ಮಾಡಿರಿ. 2ನಮ್ಮಲ್ಲಿ ಶಾಂತಿ ಸಮಾಧಾನ
ಗಳು ನೆಲಸಿ ನಾವು ದೇವರನ್ನು ಪೂರ್ಣಭಕ್ತಿಯಿಂದಲೂ
ಗೌರವದಿಂದಲೂ ಆರಾಧಿಸಲು ಸಾಧ್ಯವಾಗುವಂತೆ ಅರಸರಿ
ಗಾಗಿಯೂ ಅಧಿಕಾರಿಗಳಿಗಾಗಿಯೂ ಪ್ರಾರ್ಥಿಸಿರಿ. 3ಇದು
ಒಳ್ಳೆಯದೂ ಮತ್ತು ನಮ್ಮ ರಕ್ಷಕನಾದ ದೇವರಿಗೆ ಮೆಚ್ಚಿಕೆ
ಕರವೂ ಆಗಿದೆ. 4ಎಲ್ಲಾ ಜನರು ರಕ್ಷಿಸಲ್ಪಡಬೇಕೆಂದು,
ಸತ್ಯವನ್ನು ತಿಳಿದು ಕೊಳ್ಳಬೇಕೆಂದು ದೇವರು ಬಯಸುತ್ತಾನೆ.
5ದೇವರು ಒಬ್ಬನೇ. ದೇವರಿಗೂ ಮನುಷ್ಯರಿಗೂ ಮಧ್ಯಸ್ತನು
ಒಬ್ಬನೇ. ಮನುಷ್ಯನಾಗಿರುವ ಯೇಸು ಕ್ರಿಸ್ತನೇ ಆತನು.
6ಯೇಸುವು ಜನರೆಲ್ಲರ ಪಾಪಗಳಿಗೆ ತನ್ನನ್ನೇ ಉಚಿತವಾಗಿ ಒಪ್ಪಿಸಿ
ಕೊಟ್ಟನು. ಜನರೆಲ್ಲರೂ ರಕ್ಷಣೆ ಹೊಂದಬೇಕೆಂಬ ದೇವರ
ಅಪೇಕ್ಷೆಗೆ ಯೇಸುವು ತಕ್ಕಕಾಲದಲ್ಲಿ ಸಾಕ್ಷಿನೀಡಿದನು. 7ಆದ
ಕಾರಣವೇ ಸುವಾರ್ತೆಯನ್ನು ಸಾರುವುದಕ್ಕಾಗಿಯೂ ಅಪೊಸ್ತಲ
ನಾಗುವುದಕ್ಕಾಗಿಯೂ ಯೆಹೂದ್ಯರಲ್ಲದ ಜನರಿಗೆ ಬೋಧಿಸು
ವುದಕ್ಕಾಗಿಯೂ ನನ್ನನ್ನು ಆರಿಸಿಕೊಳ್ಳಲಾಯಿತು. (ಇದು ಸತ್ಯ.
ಖಂಡಿತವಾಗಿಯೂ ಸುಳ್ಳಲ್ಲ.) ಸತ್ಯವನ್ನು ತಿಳಿದುಕೊಳ್ಳ
ಬೇಕೆಂತಲೂ ನಂಬಬೇಕೆಂತಲೂ ನಾನು ಅವರಿಗೆ ಬೋಧಿಸು
ತ್ತೇನೆ.

8ಎಲ್ಲಾ ಸ್ಥಳಗಳಲ್ಲಿ ಪುರುಷರು ಪ್ರಾರ್ಥನೆ ಮಾಡ
ಬೇಕೆಂಬುದು ನನ್ನ ಅಪೇಕ್ಷೆ. ತಮ್ಮ ಕೈಗಳನ್ನು ಮೇಲೆತ್ತಿ
ಪ್ರಾರ್ಥಿಸುವ ಅವರು ಪರಿಶುದ್ಧರಾಗಿರಬೇಕು. ಅವರು
ವಾಗ್ವಾದ ಮಾಡುವವರೂ ಕೋಪಗೊಳ್ಳುವವರೂ ಆಗಿರ
ಬಾರದು.

9ಸ್ತ್ರೀಯರು ತಮಗೆ ಯೋಗ್ಯವಾದ ಉಡುಪುಗಳನ್ನು
ಧರಿಸಬೇಕೆಂದು ನಾನು ಅಪೇಕ್ಷಿಸುತ್ತೇನೆ. ಅವರ ಉಡುಪುಗಳು
ಅವರು ಮಾನಸ್ಥೆಯರು ಎಂಬುದನ್ನು ತೋರಿಸುವಂಥವು
ಗಳಾಗಿರಬೇಕು. ಅವರು ತಮ್ಮ ಸೌಂದರ್ಯವನ್ನು ಹೆಚ್ಚಿಸಲು
ತಲೆಕೂದಲನ್ನು ಅಲಂಕಾರಿಕವಾಗಿ ಕಟ್ಟಿಕೊಳ್ಳಕೂಡದು;
ಬಂಗಾರವನ್ನು ಮತ್ತು ಮುತ್ತುಗಳನ್ನು ತೊಟ್ಟುಕೊಳ್ಳಕೂಡದು
ಮತ್ತು ಬೆಲೆಬಾಳುವ ಬಟ್ಟೆಗಳನ್ನು ಧರಿಸಿಕೊಳ್ಳಕೂಡದು.
10ಆದರೆ ಅವರು ಯೋಗ್ಯಕಾರ್ಯಗಳನ್ನು ಮಾಡುವುದರ
ಮೂಲಕ ತಮ್ಮ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಬೇಕು. ದೇವ
ರನ್ನು ಆರಾಧಿಸುತ್ತೇವೆ ಎಂದು ಹೇಳುವ ಸ್ತ್ರೀಯರು ತಮ್ಮನ್ನು
ಈ ರೀತಿಯಲ್ಲಿಯೇ ಅಲಂಕರಿಸಿಕೊಳ್ಳಬೇಕು.

11ಸ್ತ್ರೀಯರು ಉಪದೇಶವನ್ನು ಕೇಳಬೇಕು ಮತ್ತು ವಿಧೇಯ
ರಾಗಲು ಪೂರ್ಣ ಸಿದ್ಧರಾಗಿರಬೇಕು. 12ಅವರು ಪುರುಷರಿಗೆ
ಉಪದೇಶಿಸುವುದಕ್ಕಾಗಲಿ ಅವರ ಮೇಲೆ ಅಧಿಕಾರ ಚಲಾಯಿ
ಸುವುದಕ್ಕಾಗಲಿ ನಾನು ಸಮ್ಮತಿಸುವುದಿಲ್ಲ. ಅವರು ಮೌನ
ವಾಗಿರಬೇಕು. 13ಏಕೆಂದರೆ ಮೊದಲು ನಿರ್ಮಿತನಾದವನು
ಆದಾಮ. ಅನಂತರ ನಿರ್ಮಿತಳಾದದ್ದು ಹವ್ವಳು. 14ಅಲ್ಲದೆ
ಸೈತಾನನಿಂದ ವಂಚಿಸಲ್ಪಟ್ಟದ್ದು ಆದಾಮನಲ್ಲ. ಸ್ತ್ರೀಯು
ವಂಚನೆಗೆ ಬಲಿಯಾಗಿ ಪಾಪಿಯಾದಳು. 15ಆದರೆ ಸ್ತ್ರೀಯರು
ನಂಬಿಕೆಯಲ್ಲಿ, ಪ್ರೀತಿಯಲ್ಲಿ, ಪರಿಶುದ್ಧತೆಯಲ್ಲಿ ಮತ್ತು
ಸರಿಯಾದ ನಡವಳಿಕೆಯಲ್ಲಿ ದೃಢವಾಗಿದ್ದರೆ ಮಕ್ಕಳನ್ನು ಹೆರು
ವಾಗ ರಕ್ಷಿಸಲ್ಪಡುವರು.

## ಸಭಾನಾಯಕರು

3 ನಾನು ಹೇಳುವ ಈ ಸಂಗತಿ ಸತ್ಯವಾದದ್ದು. ಅದೇನಂದರೆ,
ಸಭಾಧ್ಯಕ್ಷನಾಗಲು ಬಹಳವಾಗಿ ಪ್ರಯತ್ನಿಸುವವನು
ಒಳ್ಳೆಯ ಕೆಲಸವನ್ನೇ ಅಪೇಕ್ಷಿಸುವವನಾಗಿದ್ದಾನೆ. 2ಅವನು ಜನರ
ಟೀಕೆಗೆ ಒಳಗಾಗದಷ್ಟು ಉತ್ತಮನಾಗಿರಬೇಕು. ಅವನಿಗೆ
ಒಬ್ಬಳೇ ಪತ್ನಿಯಿರಬೇಕು. ಅವನು ಜಿತೇಂದ್ರಿಯನೂ
ಜ್ಞಾನಿಯೂ ಆಗಿರಬೇಕು; ಜನರ ಗೌರವಕ್ಕೆ ಪಾತ್ರನಾಗಿರ
ಬೇಕು; ಜನರನ್ನು ತನ್ನ ಮನೆಗೆ ಸ್ವಾಗತಿಸಿ ಅವರಿಗೆ ಸಹಾಯ
ಮಾಡಲು ಸಿದ್ಧನಾಗಿರಬೇಕು; ಒಳ್ಳೆಯ ಉಪದೇಶಕನಾಗಿರ
ಬೇಕು; 3ಮದ್ಯಪಾನದಲ್ಲಿ ಆಸ್ತಕನಾಗಿರಬಾರದು ಮತ್ತು ಹಿಂಸಾ
ತ್ಮಕನಾಗಿರಬಾರದು. ಅವನು ಸಾತ್ವಿಕನೂ ಶಾಂತನೂ ಆಗಿರ
ಬೇಕು; ಹಣದಾಸೆ ಉಳ್ಳವನಾಗಿರಬಾರದು. 4ಅವನು ತನ್ನ ಸ್ವಂತ
ಕುಟುಂಬಕ್ಕೆ ಒಳ್ಳೆಯ ನಾಯಕನಾಗಿರಬೇಕು. ಅವನ ಮಕ್ಕಳು
ಅವನಿಗೆ ವಿಧೇಯರಾಗಿದ್ದು ಪೂರ್ಣ ಗೌರವವನ್ನು ನೀಡು
ವಂತಿರಬೇಕೆಂಬುದು ಇದರ ಅರ್ಥ. 5(ತನ್ನ ಸ್ವಂತ ಕುಟುಂಬ
ವನ್ನು ಆಳಲು ತಿಳಿಯದವನು ದೇವರ ಸಭೆಯನ್ನು ಪರಾಮರಿ
ಸಲು ಸಮರ್ಥನಲ್ಲ.) 6ಅವನು ಹೊಸ ವಿಶ್ವಾಸಿಯಾಗಿರ
ಬಾರದು. ಹೊಸ ವಿಶ್ವಾಸಿಯನ್ನು ಸಭಾಧ್ಯಕ್ಷನನ್ನಾಗಿ ಮಾಡಿದರೆ,
ಅವನು ಗರ್ವಿಷ್ಠನಾಗುವನು. ಸೈತಾನನು ತನ್ನ ಗರ್ವದ ನಿಮಿತ್ತ
ಶಿಕ್ಷೆಗೆ ಒಳಗಾದಂತೆ ಇವನೂ ಶಿಕ್ಷೆಗೆ ಗುರಿಯಾಗುವನು.
7ಸಭಾಧ್ಯಕ್ಷನು ಸಭೆಯಲ್ಲಿಲ್ಲದ ಜನರ ಗೌರವಕ್ಕೆ ಪಾತ್ರನಾಗಿರ
ಬೇಕು. ಆಗ ಅವನು ಇತರರ ಟೀಕೆಗೆ ಗುರಿಯಾಗುವುದೂ ಇಲ್ಲ,
ಸೈತಾನನ ವಂಚನೆಗೆ ಸಿಕ್ಕಿಬೀಳುವುದೂ ಇಲ್ಲ.

## ಸೇವಕರು

8ಅದೇ ರೀತಿಯಲ್ಲಿ ಸಭೆಯಲ್ಲಿ ವಿಶೇಷ ಸೇವಕರಾದವರು
ತಮ್ಮ ನಡತೆಯ ನಿಮಿತ್ತ ಇತರರಿಂದ ಗೌರವ ಹೊಂದಿದವ
ರಾಗಿರಬೇಕು. ಯಥಾರ್ಥವಾಗಿ ಮಾತಾಡುವಂಥವರಾಗಿರ
ಬೇಕು. ಅವರು ಮದ್ಯಪಾನದಲ್ಲಿ ಆಸ್ತಕರಾಗಿದ್ದು ತಮ್ಮ ಕಾಲ
ವನ್ನು ಕಳೆಯುವವರಾಗಿರಬಾರದು; ಯಾವಾಗಲೂ ಇತರರನ್ನು
ಮೋಸಗೊಳಿಸಿ ಶ್ರೀಮಂತರಾಗಲು ಪ್ರಯತ್ನಿಸುವವರಾಗಿರ
ಬಾರದು; 9ದೇವರು ನಮಗೆ ತಿಳಿಸಿಕೊಟ್ಟ ಸತ್ಯವನ್ನು ಶುದ್ಧ ಮನ
ಸ್ಸಾಕ್ಷಿಯಿಂದ ಮಾಡುವವರಾಗಿರಬೇಕು. 10ಅವರನ್ನು ನೀನು
ಮೊದಲು ಪರೀಕ್ಷಿಸು. ಅವರು ಕಳಂಕರಹಿತರಾಗಿದ್ದರೆ, ಸೇವಕ
ರಾಗಿ ಸೇವೆ ಮಾಡಬಹುದು. 11ಇದೇ ರೀತಿಯಲ್ಲಿ ಸಭಾಸೇವಕಿ
ಯರಾದ ಸ್ತ್ರೀಯರು ಜನರ ಗೌರವಕ್ಕೆ ಪಾತ್ರರಾಗಿರಬೇಕು.
ಅವರು ಇತರ ಜನರ ಬಗ್ಗೆ ಕೆಟ್ಟದ್ದನ್ನು ಹೇಳುವಂಥವರಾಗಿರ

ಬಾರದು. ಅವರು ತಮ್ಮನ್ನು ಹತೋಟಿಯಲ್ಲಿ ಇಟ್ಟುಕೊಂಡಿರ
ಬೇಕು; ಎಲ್ಲಾ ವಿಷಯಗಳಲ್ಲಿಯೂ ನಂಬಿಗಸ್ತರಾಗಿರಬೇಕು.
12ಸಭಾಸೇವಕರು ಏಕ ಪತ್ನಿ ಉಳ್ಳವರಾಗಿರಬೇಕು. ಅವರು ತಮ್ಮ
ಮಕ್ಕಳಿಗೆ ಮತ್ತು ಕುಟುಂಬಕ್ಕೆ ಒಳ್ಳೆಯ ನಾಯಕರಾಗಿರಬೇಕು.
13ಯೋಗ್ಯ ಮಾರ್ಗದಲ್ಲಿ ಸೇವೆಮಾಡುವ ಜನರು ತಮಗೆ
ಗೌರವಯುತವಾದ ಸ್ಥಾನವನ್ನು ಪಡೆಯುವರು. ಕ್ರಿಸ್ತ
ಯೇಸುವಿನಲ್ಲಿ ತಮಗಿರುವ ನಂಬಿಕೆಯ ವಿಷಯದಲ್ಲಿ ಅವರು
ಭರವಸೆ ಉಳ್ಳವರಾಗಿರುತ್ತಾರೆ.

## ನಮ್ಮ ಜೀವನದ ರಹಸ್ಯ

14ನಾನು ನಿನ್ನ ಬಳಿಗೆ ಬಹುಬೇಗ ಬರುವೆನೆಂಬ ಭರವಸೆ
ನನಗಿದೆ. ಆದರೆ ಈಗ ನಾನು ಈ ಸಂಗತಿಗಳನ್ನು ಬರೆಯು
ತ್ತಿದ್ದೇನೆ.
15ನಂತರ ನಾನು ನಿನ್ನ ಬಳಿಗೆ ಬೇಗ ಬಾರದೆ ಇದ್ದರೂ,
ದೇವರ ಮನೆಯಲ್ಲಿ ಜನರು ಮಾಡಲೇಬೇಕಾದ ಕಾರ್ಯಗಳ
ಬಗ್ಗೆ ನಿನಗೆ ತಿಳಿದಿದೆ. ಆ ಮನೆಯು ಜೀವಂತ ದೇವರ ಸಭೆ.
ಅದು ಸತ್ಯದ ಅಡಿಪಾಯವೂ ಆಧಾರವೂ ಆಗಿದೆ. 16ನಿಸ್ಸಂದೇಹ
ವಾಗಿಯೂ ನಮ್ಮ ಆರಾಧನಾಜೀವಿತದ ರಹಸ್ಯವು ಮಹೋನ್ನತ
ವಾದದ್ದು:

> ಕ್ರಿಸ್ತನು ಮಾನವ ದೇಹದಲ್ಲಿ ನಮಗೆ ಪ್ರತ್ಯಕ್ಷ
> ನಾದನು. ಆತನೇ ಕ್ರಿಸ್ತನೆಂದು ಪವಿತ್ರಾತ್ಮನು
> ನಿರೂಪಿಸಿದನು. ದೇವದೂತರಿಗೆ ಆತನು ಕಾಣಿಸಿ
> ಕೊಂಡನು. ಆತನನ್ನು ಕುರಿತ ಸುವಾರ್ತೆಯನ್ನು
> ಜನಾಂಗಗಳವರಿಗೆಲ್ಲ ( ಯೆಹೂದ್ಯರಲ್ಲದವರಿಗೆ)
> ಪ್ರಸಿದ್ಧಿಪಡಿಸಲಾಯಿತು. ಲೋಕದಲ್ಲಿರುವ ಜನರು
> ಆತನಲ್ಲಿ ನಂಬಿಕೆಯಿಟ್ಟರು. ಆತನು ಮಹಿಮೆ
> ಯೊಂದಿಗೆ ಪರಲೋಕಕ್ಕೆ ಎತ್ತಲ್ಪಟ್ಟನು.

## ಕಪಟ ಬೋಧಕರ ಬಗ್ಗೆ ಎಚ್ಚರಿಕೆ

4 ಮುಂದಿನ ದಿನಗಳಲ್ಲಿ ಕೆಲವು ಜನರು ಸತ್ಯ ಬೋಧನೆ
ಯನ್ನು ನಂಬುವುದಿಲ್ಲವೆಂದು ಪವಿತ್ರಾತ್ಮನು ಸ್ಪಷ್ಟವಾಗಿ
ಹೇಳುತ್ತಾನೆ. ಆ ಜನರು ಸುಳ್ಳಾಡುವ ದುರಾತ್ಮಗಳಿಗೆ ವಿಧೇಯ
ರಾಗುವರು; ದೆವ್ವಗಳ ಬೋಧನೆಯನ್ನು ಅನುಸರಿಸುವರು. 2ಆ
ಬೋಧನೆಗಳು ಸುಳ್ಳು ಹೇಳುವ ಮತ್ತು ವಂಚಿಸುವ ಜನರ
ಮೂಲಕ ಬರುತ್ತವೆ. ಅವರು ಸರಿತಪ್ಪುಗಳ ಭೇದವನ್ನು
ಗುರುತಿಸುವುದಿಲ್ಲ. ಕಾದ ಕಬ್ಬಿಣದಿಂದ ಸುಟ್ಟುಬೂದಿಯಾಗು
ವಂತೆ ಅವರ ವಿವೇಕವು ನಾಶಗೊಂಡಿದೆ. 3ಜನರು ಮದುವೆ
ಮಾಡಿಕೊಳ್ಳುವುದು ತಪ್ಪೆಂದೂ ಕೆಲವು ಆಹಾರ ಪದಾರ್ಥ
ಗಳನ್ನು ತಿನ್ನಬಾರದೆಂದೂ ಅವರು ಹೇಳುತ್ತಾರೆ. ಆದರೆ ನಂಬಿಕೆ
ಯುಳ್ಳವರು ಮತ್ತು ಸತ್ಯವನ್ನು ತಿಳಿದಿರುವವರು ಕೃತಜ್ಞತಾಸ್ತುತಿ
ಮಾಡಿ ಆ ಆಹಾರ ಪದಾರ್ಥಗಳನ್ನು ತಿನ್ನಲಿ. ಏಕೆಂದರೆ
ಅವುಗಳನ್ನು ನಿರ್ಮಿಸಿದಾತನು ದೇವರೇ. 4ಆತನು ನಿರ್ಮಿಸಿದ
ಪ್ರತಿಯೊಂದೂ ಉತ್ತಮವಾಗಿರುತ್ತದೆ. ಆತನಿಗೆ ಕೃತಜ್ಞತಾ
ಸ್ತುತಿಮಾಡಿ ತೆಗೆದುಕೊಳ್ಳುವ ಯಾವುದನ್ನೇ ಆಗಲಿ ನಿಷಿದ್ಧ
ವೆಂದು ತಿರಸ್ಕರಿಸಬಾರದು. 5ಏಕೆಂದರೆ ದೇವರ ವಾಕ್ಯದಿಂದ
ಮತ್ತು ಪ್ರಾರ್ಥನೆಯಿಂದ ಅದು ಪವಿತ್ರವಾಗಿದೆ.

## ಕ್ರಿಸ್ತ ಯೇಸುವಿನ ಒಳ್ಳೆಯ ಸೇವಕನಾಗಿರು

6ಅಲ್ಲಿರುವ ಸಹೋದರ ಸಹೋದರಿಯರಿಗೆ ಈ ಸಂಗತಿ
ಗಳನ್ನು ತಿಳಿಸಿದರೆ, ನೀನು ಕ್ರಿಸ್ತಯೇಸುವಿನ ಒಳ್ಳೆಯ
ಸೇವಕನಾಗಿರುವೆ ಎಂಬುದನ್ನೂ ನಂಬಿಕೆಯ ನುಡಿಗಳಿಂದ
ಮತ್ತು ಉತ್ತಮ ಉಪದೇಶಗಳನ್ನು ಅನುಸರಿಸಿದ್ದರಿಂದ ಬಲ
ಗೊಂಡಿರುವೆ ಎಂಬುದನ್ನೂ ತೋರಿಸಿದಂತಾಗುತ್ತದೆ. 7ದೇವರ
ಸತ್ಯಕ್ಕೆ ಹೊಂದಿಕೆಯಾಗದ ಕ್ಷುಲ್ಲಕ ಕಥೆಗಳನ್ನು ಜನರು ಹೇಳು
ತ್ತಾರೆ. ಆ ಕಥೆಗಳ ಬೋಧನೆಯನ್ನು ಅನುಸರಿಸಬೇಡ. ದೇವರಿಗೆ
ನಿಜವಾದ ಸೇವೆ ಮಾಡಲು ನಿನಗೆ ನೀನೇ ಬೋಧಿಸಿಕೊ. 8ನೀನು
ದೇಹವನ್ನು ಪಳಗಿಸಿಕೊಂಡರೆ ನಿನಗೆ ಕೆಲವು ರೀತಿಯಲ್ಲಿ
ಸಹಾಯಕವಾಗುವುದು. ಆದರೆ ದೇವರ ಸೇವೆಯು ನಿನಗೆ ಎಲ್ಲಾ
ರೀತಿಯಲ್ಲಿಯೂ ಸಹಾಯಕವಾಗುವುದು. ದೇವರ ಸೇವೆಯು
ಇಹಪರಗಳೆರಡರಲ್ಲೂ ನಿನಗೆ ಆಶೀರ್ವಾದವನ್ನು ಉಂಟು
ಮಾಡುವುದು. 9ನಾನು ಹೇಳುವುದು ಸತ್ಯವಾದದ್ದು. ನೀನು
ಸಂಪೂರ್ಣವಾಗಿ ಅದನ್ನು ಸ್ವೀಕರಿಸಿಕೊ. 10ಆದಕಾರಣವೇ,
ನಾವು ಜೀವಸ್ವರೂಪನಾದ ದೇವರ ಮೇಲೆ ನಿರೀಕ್ಷೆಯಿಟ್ಟು
ದುಡಿಯುತ್ತಿದ್ದೇವೆ ಮತ್ತು ಹೋರಾಡುತ್ತಿದ್ದೇವೆ. ಆತನು ಎಲ್ಲಾ
ಜನರಿಗೆ ರಕ್ಷಕನಾಗಿದ್ದಾನೆ. ತನ್ನಲ್ಲಿ ನಂಬಿಕೆಯಿಡುವ ಜನರಿ
ಗೆಲ್ಲಾ ಆತನು ವಿಶೇಷವಾದ ರೀತಿಯಲ್ಲಿ ರಕ್ಷಕನಾಗಿದ್ದಾನೆ.
11ಇವುಗಳನ್ನು ಆಜ್ಞಾಪಿಸು ಮತ್ತು ಬೋಧಿಸು. 12ನೀನು
ಯೌವನಸ್ಥನಾಗಿರುವುದರಿಂದ ನಿನ್ನನ್ನು ಪ್ರಮುಖನಲ್ಲವೆಂದು
ಪರಿಗಣಿಸಿ ಅಸಡ್ಡೆಮಾಡಲು ಯಾರಿಗೂ ಅವಕಾಶಕೊಡದಿರು.
ವಿಶ್ವಾಸಿಗಳು ಹೇಗೆ ಜೀವಿಸಬೇಕೆಂಬುದಕ್ಕೆ ನೀನೇ ಅವರಿಗೆ
ಮಾದರಿಯಾಗಿರು. ನಡೆನುಡಿಗಳಲ್ಲಿ, ಪ್ರೀತಿಯಲ್ಲಿ, ನಂಬಿಕೆ
ಯಲ್ಲಿ ಮತ್ತು ಪರಿಶುದ್ಧ ಜೀವನದಲ್ಲಿ ನೀನೇ ಅವರಿಗೆ ಮಾದರಿ
ಯಾಗಿರು. 13ದೇವರ ವಾಕ್ಯವನ್ನು ಜನರಿಗೆ ಓದಿ ಹೇಳಿ ಅವರಿಗೆ
ಬಲಪಡಿಸು ಮತ್ತು ಅವರಿಗೆ ಬೋಧಿಸು. ನಾನು ಬರುವತನಕ
ಈ ಕಾರ್ಯಗಳನ್ನು ಮಾಡುತ್ತಿರು. 14ನಿನ್ನಲ್ಲಿರುವ ವರವನ್ನು
ಜ್ಞಾಪಿಸಿಕೊಳ್ಳುತ್ತಿರು. ಸಭೆಯ ಹಿರಿಯರು ಪ್ರವಾದನೆ
ಗಳೊಂದಿಗೆ ತಮ್ಮ ಕೈಗಳನ್ನು ನಿನ್ನ ಮೇಲಿಟ್ಟಾಗ ಆ ವರವು ನಿನಗೆ
ಕೊಡಲ್ಪಟ್ಟಿತು. 15 ಈ ಕಾರ್ಯಗಳನ್ನು ಮಾಡುತ್ತಲೇ ಇರು.
ಈ ಕಾರ್ಯಗಳನ್ನು ಮಾಡಲು ನಿನ್ನ ಜೀವನವನ್ನು ಮುಡಿ
ಪಾಗಿಡು. ಆಗ ನಿನ್ನ ಕಾರ್ಯವು ಅಭಿವೃದ್ಧಿಗೊಳ್ಳುತ್ತಿರುವುದನ್ನು
ಜನರೆಲ್ಲರೂ ನೋಡುವರು. 16ನಿನ್ನ ಜೀವನದಲ್ಲಿಯೂ ನಿನ್ನ
ಬೋಧನೆಯಲ್ಲಿಯೂ ಎಚ್ಚರಿಕೆಯಿಂದಿರು. ಯೋಗ್ಯವಾದ
ರೀತಿಯಲ್ಲಿ ಜೀವಿಸುತ್ತಾ ಬೋಧಿಸು. ಆಗ ನೀನು, ನಿನ್ನನ್ನೂ
ನಿನ್ನ ಬೋಧನೆ ಕೇಳುವವರನ್ನೂ ರಕ್ಷಿಸುವೆ.

## ಇತರರೊಂದಿಗೆ ಹೇಗೆ ಜೀವಿಸಬೇಕೆಂಬ ನಿಯಮಗಳು

5 ವೃದ್ಧಪುರುಷರೊಂದಿಗೆ ಕೋಪದಿಂದ ಮಾತಾಡದೆ
ಅವರನ್ನು ನಿನ್ನ ತಂದೆಯೆಂದು ಭಾವಿಸಿ ಅವರೊಂದಿಗೆ
ಮಾತನಾಡು. ಯೌವನಸ್ಥರನ್ನು ಸಹೋದರರಂತೆಯೂ 2ವೃದ್ಧ
ಸ್ತ್ರೀಯರನ್ನು ತಾಯಿಗಳಂತೆಯೂ ಯೌವನಸ್ಥೆಯರನ್ನು
ಸಹೋದರಿಯರಂತೆಯೂ ಪರಿಗಣಿಸು. ಯಾವಾಗಲೂ ಅವ
ರೊಡನೆ ಒಳ್ಳೆಯ ರೀತಿಯಲ್ಲಿ ನಡೆದುಕೊ.
3ದಿಕ್ಕಿಲ್ಲದ ವಿಧವೆಯರನ್ನು ಪರಿಪಾಲಿಸು. 4ಆದರೆ ಒಬ್ಬ
ವಿಧವೆಗೆ ಮಕ್ಕಳಾಗಲಿ, ಮೊಮ್ಮಕ್ಕಳಾಗಲಿ ಇದ್ದರೆ, ಅವರು

ತಂದೆತಾಯಿಗಳಿಗೆ ಸಹಾಯ ಮಾಡುವುದರ ಮೂಲಕ ಸ್ವಂತ
ಕುಟುಂಬಕ್ಕೆ ಗೌರವವನ್ನು ತೋರಬೇಕು. ಅವರು ಹೀಗೆ
ಮಾಡಿದರೆ, ತಂದೆತಾಯಿಗಳಿಗೆ ಮತ್ತು ಅಜ್ಜಅಜ್ಜಿಯರಿಗೆ
ಪ್ರತ್ಯುಪಕಾರ ಮಾಡಿದಂತಾಗುವುದು. ಅದು ದೇವರಿಗೆ ಮೆಚ್ಚಿಕೆ
ಯಾದದ್ದು. 5ಒಬ್ಬ ವಿಧವೆಯು ನಿಜವಾಗಿಯೂ ಸಹಾಯಕ
ರಿಲ್ಲದೆ ಒಬ್ಬಂಟಿಗಳಾಗಿದ್ದರೆ, ಆಗ ಆಕೆಯು ತನ್ನ ರಕ್ಷಣೆಗಾಗಿ
ದೇವರ ಮೇಲೆ ಭರವಸೆ ಇಡುವಳು. ಆ ಸ್ತ್ರೀಯು ಹಗಲು
ರಾತ್ರಿಯೆಲ್ಲ ಪ್ರಾರ್ಥಿಸುವಳು. ಅವಳು ದೇವರ ಸಹಾಯವನ್ನು
ಬೇಡುವಳು. 6ಆದರೆ ವಿಧವೆಯಾದವಳು ತನ್ನ ಇಚ್ಛೆ
ಪೂರೈಕೆಗಾಗಿ ತನ್ನ ಜೀವಿತವನ್ನು ಬಳಸಿಕೊಳ್ಳುವುದಾದರೆ ಅವಳು
ಬದುಕಿದ್ದರೂ ಸತ್ತಂತೆಯೆ. 7ಅಲ್ಲಿನ ವಿಶ್ವಾಸಿಗಳಿಗೆ ಈ ಕಾರ್ಯ
ಗಳನ್ನು ಮಾಡಬೇಕೆಂದು ತಿಳಿಸು. ಆಗ ಯಾರೂ ಅವರನ್ನು
ನಿಂದಿಸಲು ಸಾಧ್ಯವಿಲ್ಲ. 8ಯಾವನಾದರೂ ಸ್ವಂತ ಜನರನ್ನು
ವಿಶೇಷವಾಗಿ ಸ್ವಂತ ಕುಟುಂಬದವರನ್ನು ಪರಿಪಾಲಿಸದೆ
ಹೋದರೆ ಅವನು ಸತ್ಯಬೋಧನೆಯನ್ನು ತಿರಸ್ಕರಿಸುವವ
ನಾಗಿದ್ದಾನೆ. ಅವನು ನಂಬದವನಿಗಿಂತ ತುಂಬಾ ಕೀಳಾದವನು.

9ವಿಧವೆಯರ ಪಟ್ಟಿಗೆ ಸೇರಿಸಲ್ಪಟ್ಟ ವಿಧವೆಯರು ವಯಸ್ಸಿನಲ್ಲಿ
ಅರವತ್ತು ವರ್ಷಕ್ಕಿಂತ ಮೇಲ್ಪಟ್ಟಿರಬೇಕು. ಅವಳು ತನ್ನ
ಗಂಡನಿಗೆ ನಂಬಿಗಸ್ತಳಾಗಿದ್ದವಳೆಂದೂ 10ಒಳ್ಳೆಯ ಕಾರ್ಯ
ಗಳನ್ನು ಮಾಡುತ್ತಿದ್ದವಳೆಂದೂ ಹೆಸರನ್ನು ಪಡೆದಿರಬೇಕು.
ಅಂದರೆ, ಅವಳು ತನ್ನ ಮಕ್ಕಳನ್ನು ಸಾಕಿಸಲಹಿದವಳೂ, ಅತಿಥಿ
ಗಳನ್ನು ಸತ್ಕರಿಸಿದವಳೂ, ದೇವಜನರ ಪಾದಗಳನ್ನು ತೊಳೆದ
ವಳೂ, ತೊಂದರೆಯಲ್ಲಿರುವ ಜನರಿಗೆ ಸಹಾಯ ಮಾಡಿದವಳೂ
ಮತ್ತು ತನ್ನಿಂದಾದಷ್ಟು ಒಳ್ಳೆಯ ಕಾರ್ಯಗಳನ್ನು ಮಾಡಿದವಳೂ
ಆಗಿರಬೇಕು.

11ಆದರೆ ಪ್ರಾಯದ ವಿಧವೆಯರನ್ನು ಆ ಪಟ್ಟಿಯಲ್ಲಿ
ಸೇರಿಸಬಾರದು. ಅವರು ಕ್ರಿಸ್ತನಿಗೆ ತಮ್ಮನ್ನು ಒಪ್ಪಿಸಿಕೊಂಡಿ
ದ್ದರೂ ದೈಹಿಕ ಬಯಕೆಗಳ ಒತ್ತಡದಿಂದ ಪದೇಪದೇ ಆತನಿಗೆ
ವಿಮುಖರಾಗುತ್ತಾರೆ. ನಂತರ ಅವರು ಮತ್ತೆ ಮದುವೆಯಾಗಲು
ಆಸಕ್ತರಾಗುತ್ತಾರೆ. 12ತಾವು ಕೊಟ್ಟ ವಾಗ್ದಾನವನ್ನು ಮೀರಿದವ
ರೆಂಬ ತೀರ್ಪು ಅವರಿಗಾಗಬೇಕು. 13ಇದಲ್ಲದೆ, ಅವರು ಮನೆ
ಮನೆಗೆ ಅಲೆಯುತ್ತಾ ತಮ್ಮ ಕಾಲವನ್ನು ಕಳೆಯ
ಲಾರಂಭಿಸುತ್ತಾರೆ; ಹರಟೆ ಮಾತುಗಳನ್ನಾಡುತ್ತಾ ಇತರರ
ಜೀವನದಲ್ಲಿ ತಲೆಹಾಕಿ ಕಾಲಹರಣ ಮಾಡುತ್ತಾರೆ; ಹೇಳ
ಬಾರದ ಸಂಗತಿಗಳನ್ನೆಲ್ಲ ಹೇಳುತ್ತಾರೆ. 14ಆದುದರಿಂದ ಅವರು
ಮದುವೆ ಮಾಡಿಕೊಂಡು ಮಕ್ಕಳನ್ನು ಪಡೆಯಲಿ ಮತ್ತು ತಮ್ಮ
ಮನೆಗಳನ್ನು ನೋಡಿಕೊಳ್ಳಲಿ. ಆಗ ಅವರನ್ನು ಟೀಕಿಸಲು ನಮ್ಮ
ಶತ್ರುವಿಗೆ ಯಾವ ಕಾರಣವೂ ಇರುವುದಿಲ್ಲ. 15ಆದರೆ
ಈಗಾಗಲೇ ಕೆಲವರು ತಮ್ಮ ದಾರಿಯನ್ನು ಬದಲಾಯಿಸಿ ಸೈತಾನ
ನನ್ನು ಹಿಂಬಾಲಿಸಿದ್ದಾರೆ.

16ವಿಶ್ವಾಸಿಯಾದ ಸ್ತ್ರೀಯ ಕುಟುಂಬದಲ್ಲಿ ವಿಧವೆಯರಿದ್ದರೆ,
ಆಕೆಯೇ ಅವರನ್ನು ಪರಿಪಾಲಿಸಲಿ. ಅವರನ್ನು ನೋಡಿ
ಕೊಳ್ಳುವಂಥ ಜವಾಬ್ದಾರಿಯನ್ನು ಸಭೆಗೆ ಕೊಡಕೂಡದು. ಆಗ
ದಿಕ್ಕಿಲ್ಲದ ವಿಧವೆಯರನ್ನು ನೋಡಿಕೊಳ್ಳಲು ಸಭೆಗೆ ಸಾಧ್ಯ
ವಾಗುವುದು.

17ಸಭೆಯನ್ನು ಉತ್ತಮ ಮಾರ್ಗದಲ್ಲಿ ನಡೆಸುವ ಹಿರಿಯರು
ಗೌರವಕ್ಕೂ ಸಂಬಳಕ್ಕೂ ಯೋಗ್ಯರಾಗಿದ್ದಾರೆ. ಪ್ರಸಂಗಮಾಡು
ವುದರಲ್ಲಿಯೂ ಉಪದೇಶಮಾಡುವುದರಲ್ಲಿಯೂ ನಿರತ
ರಾಗಿರುವ ಹಿರಿಯರು ಉನ್ನತವಾದ ಗೌರವವನ್ನು ಪಡೆಯು
ತ್ತಾರೆ. 18ಏಕೆಂದರೆ ‘‘ಕಣ ತುಳಿಯುವ ಎತ್ತಿನ ಬಾಯನ್ನು
ಕಟ್ಟಬಾರದು’’ * ಎಂಬುದಾಗಿಯೂ ‘‘ದುಡಿಯುವ ಆಳಿಗೆ
ತಕ್ಕಕೂಲಿ ದೊರೆಯಬೇಕು’’ ಎಂಬುದಾಗಿಯೂ ಪವಿತ್ರ
ಗ್ರಂಥವು ಹೇಳುತ್ತದೆ.

19ಸಭೆಯ ಹಿರಿಯರನ್ನು ಕುರಿತು ಯಾವನಾದರೂ ದೂರು
ಹೇಳಿದರೆ ಇಬ್ಬರು ಅಥವಾ ಮೂವರು ಸಾಕ್ಷಿಗಳಿಲ್ಲದ ಹೊರತು
ಅವನ ಮಾತುಗಳಿಗೆ ಕಿವಿಗೊಡಬೇಡ. 20ಪಾಪ ಮಾಡುವ
ಜನರನ್ನು ಸಭೆಯಲ್ಲಿ ಎಲ್ಲರ ಎದುರಿನಲ್ಲಿಯೇ ಗದರಿಸು. ಆಗ
ಇತರರಿಗೂ ಎಚ್ಚರಿಕೆ ನೀಡಿದಂತಾಗುವುದು.

21ನೀನು ಈ ಕಾರ್ಯಗಳನ್ನು ಮಾಡಬೇಕೆಂದು ದೇವರ,
ಯೇಸು ಕ್ರಿಸ್ತನ ಮತ್ತು ಆರಿಸಲ್ಪಟ್ಟ ದೇವದೂತರ ಸನ್ನಿಧಿಯಲ್ಲಿ
ನಾನು ಆಜ್ಞಾಪಿಸುತ್ತೇನೆ. ಆದರೆ ಸತ್ಯವನ್ನು ತಿಳಿಯುವುದಕ್ಕಿಂತ
ಮೊದಲೇ ಜನರಿಗೆ ತೀರ್ಪು ನೀಡಬೇಡ. ಯಾರಿಗೂ ಪಕ್ಷಪಾತ
ತೋರಬೇಡ.

22ನೀನು ನಿನ್ನ ಹಸ್ತಗಳನ್ನು ಯಾರ ಮೇಲಾದರೂ ಇಟ್ಟು
ಅವನನ್ನು ಸಭಾಹಿರಿಯನನ್ನಾಗಿ ನೇಮಿಸುವುದಕ್ಕಿಂತ ಮೊದಲೇ
ಗಮನವಿಟ್ಟು ಆಲೋಚನೆಮಾಡು. ಇತರ ಜನರ ಪಾಪಗಳಲ್ಲಿ
ಪಾಲುಗಾರನಾಗದೆ ಶುದ್ಧನಾಗಿರು.

23ತಿಮೊಥೆಯನೇ, ನೀನು ನೀರನ್ನು ಮಾತ್ರ ಕುಡಿಯದೆ ಸ್ವಲ್ಪ
ದ್ರಾಕ್ಷಾರಸವನ್ನು ಸಹ ಕುಡಿಯಬೇಕು. ಇದರಿಂದ ನಿನ್ನ ಜೀರ್ಣ
ಶಕ್ತಿಯು ಹೆಚ್ಚುವುದರಿಂದ ಪದೇಪದೇ ಅಸ್ವಸ್ಥನಾಗುವುದಿಲ್ಲ.

24ಕೆಲವು ಜನರ ಪಾಪಗಳು ಎದ್ದುಕಾಣುತ್ತವೆ. ಅವರಿಗೆ
ನ್ಯಾಯತೀರ್ಪಾಗುವುದೆಂಬುದನ್ನು ಅವರ ಪಾಪಗಳೇ ತೋರ್ಪ
ಡಿಸುತ್ತವೆ. ಆದರೆ ಇತರ ಕೆಲವು ಜನರ ಪಾಪಗಳು ಸ್ವಲ್ಪಕಾಲದ
ನಂತರ ತಿಳಿದು ಬರುತ್ತವೆ. 25ಹಾಗೆಯೇ, ಕೆಲವರ ಒಳ್ಳೆಯ
ಕಾರ್ಯಗಳು ಪ್ರಸಿದ್ಧವಾಗಿವೆ. ಇನ್ನು ಕೆಲವರ ಒಳ್ಳೆಯ
ಕಾರ್ಯಗಳು ಪ್ರಸಿದ್ಧವಾಗಿಲ್ಲದಿದ್ದರೂ ಅವು ಮರೆಯಾಗಿರಲು
ಸಾಧ್ಯವಿಲ್ಲ.

6 ಗುಲಾಮರು ತಮ್ಮ ಯಜಮಾನರಿಗೆ ಸಂಪೂರ್ಣ ಗೌರವ
ಕೊಡಬೇಕು. ಆಗ ದೇವರ ಹೆಸರಾಗಲಿ ನಮ್ಮ ಉಪದೇಶ
ವಾಗಲಿ ಟೀಕೆಗೆ ಗುರಿಯಾಗುವುದಿಲ್ಲ. 2ಕೆಲವರಿಗೆ ವಿಶ್ವಾಸಿ
ಗಳಾದ ಯಜಮಾನರಿದ್ದಾರೆ. ಆದ್ದರಿಂದ ಆ ಗುಲಾಮರು ಮತ್ತು
ಯಜಮಾನರು ಸಹೋದರರಾಗಿದ್ದಾರೆ. ಆದರೆ ಅವರು ತಮ್ಮ
ಯಜಮಾನರಿಗೆ ಕಡಿಮೆ ಗೌರವ ಕೊಡದೆ ತಮ್ಮ ಯಜಮಾನರ
ಸೇವೆಯನ್ನು ಇನ್ನೂ ಉತ್ತಮವಾಗಿ ಮಾಡಬೇಕು. ಏಕೆಂದರೆ
ಅವರು ಒಳ್ಳೆಯ ಕೆಲಸಗಳಿಗಾಗಿ ತಮ್ಮನ್ನು ಪ್ರತಿಷ್ಠಿಸಿಕೊಳ್ಳುವ
ವಿಶ್ವಾಸಿಗಳಾಗಿದ್ದಾರೆ ಮತ್ತು ಸ್ನೇಹಿತರಾಗಿದ್ದಾರೆ. *

### ದುರ್ಬೋಧನೆ ಮತ್ತು ನಿಜವಾದ ಶ್ರೀಮಂತಿಕೆ

ಈ ಕಾರ್ಯಗಳನ್ನು ಮಾಡುವಂತೆ ನೀನು ಜನರಿಗೆ ಉಪದೇಶಿ
ಸಬೇಕು ಮತ್ತು ತಿಳಿಸಬೇಕು. 3ಕೆಲವು ಜನರು ಸುಳ್ಳುಸಂಗತಿ

---

**ಕಣ … ಕಟ್ಟಬಾರದು** ಧರ್ಮೋಪದೇಶ. 25:4. ಲೂಕ10:7.

**ವಚನ 2** ಅಥವಾ ‘‘ಏಕೆಂದರೆ ಅವರು ತಾವು ಪ್ರೀತಿಸುವ ವಿಶ್ವಾಸಿಗಳಿಗೇ ಸಹಾಯ ಮಾಡುವವರಾಗಿದ್ದಾರೆ.

ಗಳನ್ನು ಬೋಧಿಸುತ್ತಾರೆ. ಆ ಜನರು ನಮ್ಮ ಪ್ರಭುವಾದ ಯೇಸುವಿನ ಸತ್ಯ ಬೋಧನೆಯನ್ನು ಒಪ್ಪುವುದಿಲ್ಲ. ದೇವರ ಸೇವೆಯನ್ನು ಸತ್ಯಕ್ಕನುಸಾರವಾಗಿ ಮಾಡಬೇಕೆಂಬ ಉಪದೇಶವನ್ನು ಅವರು ಸ್ವೀಕರಿಸಿಕೊಳ್ಳುವುದಿಲ್ಲ. 4ದುರ್ಬೋಧಕನು ಗರ್ವದಿಂದ ತುಂಬಿದವನಾಗಿರುತ್ತಾನೆ ಮತ್ತು ಅವನಿಗೆ ಏನೂ ಅರ್ಥವಾಗುವುದಿಲ್ಲ. ಅವನು ಕುತರ್ಕ ವಾಗ್ವಾದ ಮಾಡುವುದರಲ್ಲಿ ಆಸಕ್ತನಾಗಿದ್ದಾನೆ. ಇದರಿಂದ ಹೊಟ್ಟೆಕಿಚ್ಚು, ಜಗಳ, ನಿಂದನೆ ಮತ್ತು ದುಸ್ಸಂಶಯಗಳು ಉಂಟಾಗುತ್ತವೆ. 5ಇದಲ್ಲದೆ ಕೆಡುಕರಲ್ಲಿ ವಾದವಿವಾದಗಳು ಹುಟ್ಟುತ್ತವೆ. ಆ ಜನರು ಸತ್ಯವನ್ನು ತೊರೆದವರಾಗಿದ್ದಾರೆ. ದೇವರ ಸೇವೆಯು ಐಶ್ವರ್ಯವನ್ನು ಗಳಿಸುವ ಮಾರ್ಗವೆಂಬುದು ಅವರ ಆಲೋಚನೆ.

6ದೇವರ ಸೇವೆ ಮಾಡುವವನು ತನ್ನಲ್ಲಿರುವುದರಲ್ಲಿ ಸಂತುಷ್ಟನಾಗಿದ್ದರೆ, ಅವನು ದೊಡ್ಡ ಶ್ರೀಮಂತನೇ ಸರಿ. 7ನಾವು ಲೋಕಕ್ಕೆ ಬಂದಾಗ ಏನನ್ನೂ ತೆಗೆದುಕೊಂಡು ಬರಲಿಲ್ಲ. ನಾವು ಸಾಯುವಾಗ ಏನನ್ನೂ ತೆಗೆದುಕೊಂಡು ಹೋಗುವುದಿಲ್ಲ. 8ಆದ್ದರಿಂದ ಊಟ ಬಟ್ಟೆಗಳಿದ್ದರೆ ಸಾಕು, ನಾವು ಸಂತುಷ್ಟರಾಗುತ್ತೇವೆ. 9ಶ್ರೀಮಂತರಾಗಬೇಕೆನ್ನುವವರು ತಮ್ಮನ್ನು ತಾವೇ ಶೋಧನೆಗೆ ಗುರಿಪಡಿಸಿಕೊಳ್ಳುವರು. ಅವರು ಉರ್ಲಿನಲ್ಲಿ ಸಿಕ್ಕಿಹಾಕಿಕೊಂಡವರಾಗಿದ್ದಾರೆ. ಅವರು ಹಾನಿಕರವಾದ ಅನೇಕ ಮೂರ್ಖ ಆಸೆಗಳಲ್ಲಿ ಸಿಕ್ಕಿಬೀಳುವರು ಅವು ಜನರನ್ನು ಹಾಳು ಮಾಡಿ, ನಾಶಗೊಳಿಸುತ್ತವೆ. 10ಹಣದಾಸೆಯು ಎಲ್ಲಾ ವಿಧವಾದ ಕೆಟ್ಟತನಕ್ಕೆ ಮೂಲವಾಗುತ್ತದೆ. ಕೆಲವು ಜನರು ಹೆಚ್ಚುಹೆಚ್ಚು ಹಣವನ್ನು ಗಳಿಸಿಕೊಳ್ಳುವುದಕ್ಕಾಗಿ ಸತ್ಯೋಪದೇಶವನ್ನು ತೊರೆದುಬಿಟ್ಟಿದ್ದಾರೆ. ಆದರೆ ಅವರು ತಮ್ಮನ್ನು ತಾವೇ ಹೆಚ್ಚು ವೇದನೆಗೆ ಗುರಿಪಡಿಸಿಕೊಂಡಿದ್ದಾರೆ.

### ನೀವು ನೆನಪಿನಲ್ಲಿಡಬೇಕಾದ ಕೆಲವು ಸಂಗತಿಗಳು

11ಆದರೆ ನೀನು ದೇವರ ಮನುಷ್ಯ. ಆದ್ದರಿಂದ ಈ ಎಲ್ಲಾ ಸಂಗತಿಗಳಿಂದ ದೂರವಾಗಿರು. ದೇವರ ಸೇವೆಯನ್ನು ಮಾಡುತ್ತಾ ಉತ್ತಮಮಾರ್ಗದಲ್ಲಿ ಜೀವಿಸಲು ಪ್ರಯತ್ನಿಸು; ನಂಬಿಕೆ, ಪ್ರೀತಿ, ತಾಳ್ಮೆ, ಸಾತ್ವಿಕತೆಗಳನ್ನು ಹೊಂದಿದವನಾಗಿರು. 12ನಂಬಿಕೆಯಲ್ಲಿ ದೃಢವಾಗಿರುವುದು ಓಟದ ಸ್ಪರ್ಧೆಗೆ ಹೋಲಿಕೆಯಾಗಿದೆ. ಓಟದ ಸ್ಪರ್ಧೆಯಲ್ಲಿ ಗೆಲ್ಲಲು ನಿನ್ನಿಂದ ಸಾಧ್ಯವಾದಷ್ಟು ಪ್ರಯತ್ನಿಸು. ನಿತ್ಯಜೀವವನ್ನು ಪಡೆದುಕೊಳ್ಳಲು ಪ್ರಯಾಸಪಡು. ಅದನ್ನು ಹೊಂದಿಕೊಳ್ಳುವುದಕ್ಕಾಗಿ ನೀನು ಕರೆಯಲ್ಪಟ್ಟಿರುವೆ. ಕ್ರಿಸ್ತ ನಂಬಿಕೆಯ ಕುರಿತಾದ ಸತ್ಯವನ್ನು ನೀನು ಅನೇಕ ಜನರ ಎದುರಿನಲ್ಲಿ ಒಪ್ಪಿಕೊಂಡೆಯಲ್ಲಾ. 13ಪೊಂತ್ಯ ಪಿಲಾತನ ಮುಂದೆ ಸಾಕ್ಷಿ ನೀಡಿದ ಕ್ರಿಸ್ತಯೇಸುವಿನ ಸನ್ನಿಧಿಯಲ್ಲಿಯೂ ಸರ್ವಸೃಷ್ಟಿಗೆ ಜೀವದಾಯಕನಾದ ದೇವರ ಸನ್ನಿಧಿಯಲ್ಲಿಯೂ ನಾನು ನಿನಗೆ ಆಜ್ಞಾಪಿಸುವುದೇನಂದರೆ, 14ನಮ್ಮ ಪ್ರಭುವಾದ ಯೇಸು ಕ್ರಿಸ್ತನು ಮತ್ತೆ ಪ್ರತ್ಯಕ್ಷನಾಗುವ ಕಾಲದವರೆಗೆ ನೀನು ಆ ಕಾರ್ಯಗಳನ್ನು ತಪ್ಪಿಲ್ಲದೆ, ನಿಂದಾರಹಿತನಾಗಿ ಮಾಡುತ್ತಿರು. 15ದೇವರು ತಕ್ಕ ಸಮಯದಲ್ಲಿ ಅದನ್ನು ನೆರವೇರಿಸುವನು. ಆತನು ಭಾಗ್ಯವಂತನಾದ ಏಕಾಧಿಪತಿಯೂ ರಾಜಾಧಿರಾಜನೂ ಪ್ರಭುಗಳಿಗೆ ಪ್ರಭುವೂ ಆಗಿದ್ದಾನೆ.

16ಸಾವಿಲ್ಲದವನು ಆತನೊಬ್ಬನೇ. ಆತನು ಉಜ್ವಲ ಬೆಳಕಿನಲ್ಲಿ ವಾಸವಾಗಿರುವುದರಿಂದ ಆತನ ಹತ್ತಿರಕ್ಕೆ ಜನರು ಹೋಗಲು ಸಾಧ್ಯವಿಲ್ಲ. ಆತನನ್ನು ಇದುವರೆಗೆ ಯಾರೂ ನೋಡಿಲ್ಲ, ನೋಡಲು ಸಾಧ್ಯವೂ ಇಲ್ಲ. ಆತನಿಗೆ ಗೌರವವೂ ಆಧಿಪತ್ಯವೂ ಸದಾಕಾಲವಿರಲಿ. ಆಮೆನ್.

17ಇಹಲೋಕದ ವಿಷಯಗಳಲ್ಲಿ ಶ್ರೀಮಂತರಾಗಿರುವ ಜನರಿಗೆ ಈ ಆಜ್ಞೆಗಳನ್ನು ತಿಳಿಸು. ಗರ್ವಪಡದಂತೆಯೂ ಹಣವನ್ನು ಅವಲಂಬಿಸಿಕೊಳ್ಳದೆ ದೇವರಲ್ಲೇ ನಿರೀಕ್ಷೆಯಿಡುವಂತೆಯೂ ಅವರಿಗೆ ತಿಳಿಸು. ಹಣವು ಭರವಸೆಗೆ ಯೋಗ್ಯವಲ್ಲ. ದೇವರಾದರೋ ನಮ್ಮ ಸಂತೋಷಕ್ಕಾಗಿ ಸಮಸ್ತವನ್ನು ನಮಗೆ ಧಾರಾಳವಾಗಿ ದಯಪಾಲಿಸುತ್ತಾನೆ. 18ಒಳ್ಳೆಯ ಕಾರ್ಯಗಳನ್ನು ಮಾಡಬೇಕೆಂದು ಶ್ರೀಮಂತರಿಗೆ ತಿಳಿಸು. ಸತ್ಕಾರ್ಯಗಳನ್ನು ಮಾಡುವುದರಲ್ಲೇ ಶ್ರೀಮಂತರಾಗಿರಬೇಕೆಂದು ಅವರಿಗೆ ತಿಳಿಸು. ಪರೋಪಕಾರದಲ್ಲೂ ಹಂಚಿಕೊಳ್ಳುವುದರಲ್ಲೂ ಸಂತಸಪಡಲು ಅವರಿಗೆ ತಿಳಿಸು. 19ಆಗ ಪರಲೋಕದಲ್ಲಿ ಒಂದು ನಿಧಿಯನ್ನು ಅವರು ಕೂಡಿಟ್ಟು ಕೊಂಡಂತಾಗುತ್ತದೆ. ಆ ನಿಧಿಯೇ ಅವರ ಮುಂದಿನ ಜೀವಿತಕ್ಕೆ ಭದ್ರವಾದ ಅಸ್ತಿವಾರವಾಗಿದೆ. ಹೀಗೆ ಅವರು ಶಾಶ್ವತ ಜೀವವನ್ನು ಹೊಂದಿಕೊಳ್ಳುವರು. 20ತಿಮೊಥೆಯನೇ, ನಿನ್ನ ವಶಕ್ಕೆ ಕೊಡಲಾಗಿರುವ ಸದ್ಬೋಧನೆಯನ್ನು ಸುರಕ್ಷಿತವಾಗಿ ಕಾಪಾಡು. ಪ್ರಾಪಂಚಿಕವಾದ ಮೂರ್ಖ ಸಂಗತಿಗಳನ್ನು ಹೇಳುವ ಜನರಿಂದಲೂ ಸತ್ಯದ ವಿರುದ್ಧವಾಗಿ ವಾದ ಮಾಡುವ ಜನರಿಂದಲೂ ದೂರವಾಗಿರು. ಅವರು ಅದನ್ನು ಜ್ಞಾನವೆಂದು ಕರೆದರೂ ಅದು ನಿಜವಾದ ಜ್ಞಾನವಲ್ಲ. 21ಕೆಲವರು ತಮಗೆ ಜ್ಞಾನ ಇದೆಯೆಂದು ಹೇಳಿಕೊಂಡರೂ ಸತ್ಯೋಪದೇಶವನ್ನು ತೊರೆದು ಬಿಟ್ಟವರಾಗಿದ್ದಾರೆ. ದೇವರ ಕೃಪೆಯು ನಿಮ್ಮೆಲ್ಲರೊಂದಿಗಿರಲಿ.

# ತಿಮೊಥೆಯನಿಗೆ ಬರೆದ ಎರಡನೆ ಪತ್ರ

1 ಕ್ರಿಸ್ತಯೇಸುವಿನ ಅಪೊಸ್ತಲನಾದ ಪೌಲನು ತಿಮೊಥೆಯ
ನಿಗೆ ಬರೆಯುವ ಪತ್ರ. ದೇವರ ಚಿತ್ತಾನುಸಾರವಾಗಿ ನಾನು
ಅಪೊಸ್ತಲನಾದೆನು. ಕ್ರಿಸ್ತ ಯೇಸುವಿನಲ್ಲಿರುವ ಜೀವವಾಗ್ದಾನ
ವನ್ನು ಜನರಿಗೆ ತಿಳಿಯಪಡಿಸಲು ದೇವರು ನಮ್ಮನ್ನು ಕಳುಹಿ
ಸಿದನು.
2 ತಿಮೊಥೆಯನೇ, ನೀನು ನನಗೆ ಪ್ರಿಯ ಮಗನಂತಿರುವೆ.
ತಂದೆಯಾದ ದೇವರಿಂದ ಮತ್ತು ನಮ್ಮ ಪ್ರಭುವಾದ ಕ್ರಿಸ್ತ
ಯೇಸುವಿನಿಂದ ನಿನಗೆ ಕೃಪೆಯೂ ಕರುಣೆಯೂ ಶಾಂತಿಯೂ
ಲಭಿಸಲಿ.

### ಕೃತಜ್ಞತಾಸ್ತುತಿ ಮತ್ತು ಪ್ರೋತ್ಸಾಹ

3 ನಾನು ಹಗಲಿರುಳು ನನ್ನ ಪ್ರಾರ್ಥನೆಗಳಲ್ಲಿ ತಪ್ಪದೆ ನಿನ್ನನ್ನು
ಜ್ಞಾಪಿಸಿಕೊಂಡು ನಿನ್ನ ವಿಷಯದಲ್ಲಿ ದೇವರಿಗೆ ಕೃತಜ್ಞತಾಸ್ತುತಿ
ಸಲ್ಲಿಸುತ್ತೇನೆ. ನನ್ನ ಪೂರ್ವಿಕರು ಸೇವೆ ಸಲ್ಲಿಸಿದ್ದು ಆತನಿಗೇ.
ಯೋಗ್ಯವಾದದ್ದೆಂದು ನನಗೆ ತಿಳಿದಿರುವುದನ್ನೇ ಮಾಡುತ್ತಾ
ಆತನ ಸೇವೆ ಮಾಡುತ್ತಿದ್ದೇನೆ. 4 ನೀನು ನನಗಾಗಿ ಕಣ್ಣೀರು
ಸುರಿಸಿದ್ದು ನನ್ನ ನೆನಪಿನಲ್ಲಿದೆ. ನಿನ್ನನ್ನು ನೋಡಬೇಕೆಂದು
ಬಹಳ ಆಸೆಯಾಗಿದೆ. ನಿನ್ನನ್ನು ನೋಡಿದಾಗ ನನ್ನಲ್ಲಿ ಆನಂದವು
ತುಂಬಿಹೋಗುವುದು. 5 ನಿನ್ನ ನಿಜವಾದ ನಂಬಿಕೆಯು ನನ್ನ
ನೆನಪಿನಲ್ಲಿದೆ. ಆ ವಿಧವಾದ ನಂಬಿಕೆಯು ನಿನ್ನ ಅಜ್ಜಿಯಾದ
ಲೋವಿಯಲ್ಲೂ ನಿನ್ನ ತಾಯಿಯಾದ ಯೂನಿಕೆಯಲ್ಲೂ ಇತ್ತು.
ಈಗ ಅದೇ ನಂಬಿಕೆಯು ನಿನ್ನಲ್ಲಿಯೂ ಇದೆಯೆಂದು ನನಗೆ
ತಿಳಿದದೆ. 6 ದೇವರು ನಿನಗೆ ದಯಪಾಲಿಸಿರುವ ವರವನ್ನು ನೀನು
ನೆನಪು ಮಾಡಿಕೊಳ್ಳಬೇಕೆಂದು ನಾನು ಅಪೇಕ್ಷಿಸುವುದು ಈ
ಕಾರಣದಿಂದಲೇ. ನಾನು ನನ್ನ ಕೈಗಳನ್ನು ನಿನ್ನ ಮೇಲಿಟ್ಟಾಗ
ಆತನು ನಿನಗೆ ಆ ವರವನ್ನು ದಯಪಾಲಿಸಿದನು. ಬೆಂಕಿಯ
ಕಿಡಿಯು ಪ್ರಜ್ವಲವಾಗಿ ದಟ್ಟವಾದ ಬೆಂಕಿಯಾಗುವಂತೆ ನಿನ್ನ
ವರವನ್ನು ಉಪಯೋಗಿಸುತ್ತಾ ಅದನ್ನು ಅಧಿಕಗೊಳಿಸ
ಬೇಕೆಂಬುದು ನನ್ನ ಅಪೇಕ್ಷೆ. 7 ದೇವರು ನಮಗೆ ಕೊಟ್ಟದ್ದು
ನಮ್ಮನ್ನು ಹೇಡಿಗಳನ್ನಾಗಿ ಮಾಡುವ ಆತ್ಮವನ್ನಲ್ಲ. ನಮ್ಮನ್ನು
ಬಲದಿಂದ, ಪ್ರೀತಿಯಿಂದ ಮತ್ತು ಸ್ವಶಿಕ್ಷಣದಿಂದ ತುಂಬಿಸುವ
ಆತ್ಮವನ್ನು ಆತನು ಕೊಟ್ಟನು.
8 ನಮ್ಮ ಪ್ರಭುವಾದ ಯೇಸುವನ್ನು ಕುರಿತು ಜನರಿಗೆ ತಿಳಿಸು
ವುದಕ್ಕಾಗಲಿ ಪ್ರಭುವಿಗಾಗಿ ಸೆರೆಯಲ್ಲಿರುವ ನನ್ನ ವಿಷಯ
ದಲ್ಲಾಗಲಿ ನಾಚಿಕೆಪಟ್ಟುಕೊಳ್ಳಬೇಡ. ಅದಕ್ಕೆ ಬದಲಾಗಿ
ಸುವಾರ್ತೆಗೋಸ್ಕರ ನನ್ನೊಡನೆ ಸಂಕಟವನ್ನು ಅನುಭವಿಸು.
ಅದಕ್ಕೆ ಬೇಕಾದ ಶಕ್ತಿಯನ್ನು ದೇವರೇ ನಮಗೆ ದಯಪಾಲಿಸು
ತ್ತಾನೆ. 9 ಆತನು ನಮ್ಮನ್ನು ರಕ್ಷಿಸಿ, ತನ್ನ ಪವಿತ್ರ ಜನರಾಗಿರು
ವುದಕ್ಕಾಗಿ ಕರೆದನು. ನಾವು ಮಾಡಿದ ಒಳ್ಳೆಯ ಕಾರ್ಯಗಳಿಂದ
ಹೀಗಾಯಿತು ಎಂದಲ್ಲ. ಆತನು ತನ್ನ ಸಂಕಲ್ಪಕ್ಕನುಸಾರವಾಗಿ
ಮತ್ತು ಕೃಪೆಗನುಸಾರವಾಗಿ ನಮ್ಮನ್ನು ರಕ್ಷಿಸಿ ತನ್ನವರನ್ನಾಗಿ
ಮಾಡಿದನು. ಅನಾದಿಕಾಲದಲ್ಲಿಯೇ ಈ ಕೃಪೆಯು ಕ್ರಿಸ್ತ
ಯೇಸುವಿನ ಮೂಲಕ ನಮಗೆ ದೊರೆಯಿತು. 10 ಆ ಕೃಪೆಯನ್ನು
ಈವರೆಗೆ ನಮಗೆ ತೋರ್ಪಡಿಸಿರಲಿಲ್ಲ. ನಮ್ಮ ರಕ್ಷಕನಾದ ಕ್ರಿಸ್ತ
ಯೇಸು ಪ್ರತ್ಯಕ್ಷನಾದಾಗ ಅದನ್ನು ನಮಗೆ ತೋರಿಸಲಾಯಿತು.
ಯೇಸು ಮರಣವನ್ನು ನಾಶಪಡಿಸಿ, ನಮಗೆ ಜೀವಮಾರ್ಗವನ್ನು
ಸುವಾರ್ತೆಯ ಮೂಲಕ ತೋರಿದನು.
11 ಆ ಸುವಾರ್ತೆಗೋಸ್ಕರ ನನ್ನನ್ನು ಪ್ರಚಾರಕನನ್ನಾಗಿಯೂ
ಅಪೊಸ್ತಲನನ್ನಾಗಿಯೂ ಉಪದೇಶಕನನ್ನಾಗಿಯೂ ಆರಿಸಿ
ಕೊಳ್ಳಲಾಯಿತು. 12 ಸುವಾರ್ತೆಯನ್ನು ತಿಳಿಸಿದ್ದರಿಂದಲೇ
ನಾನೀಗ ಸಂಕಟವನ್ನು ಅನುಭವಿಸುತ್ತಿದ್ದೇನೆ. ಆದರೆ ನಾನು
ನಾಚಿಕೆಪಡುವುದಿಲ್ಲ. ನಾನು ನಂಬಿರುವಾತನನ್ನು ಬಲ್ಲೆನು.
ಆತನು ನನ್ನ ವಶಕ್ಕೆ ಒಪ್ಪಿಸಿರುವುದನ್ನು ಆ ದಿನವು ಬರುವತನಕ
ಸಂರಕ್ಷಿಸಲು ಆತನು ಸಮರ್ಥನೆಂಬುದನ್ನು ಖಚಿತವಾಗಿ
ಬಲ್ಲೆನು. 13 ನನ್ನಿಂದ ಕೇಳಿರುವ ಸತ್ಯಬೋಧನೆಗಳನ್ನು ಅನು
ಸರಿಸು. ನೀನು ಏನನ್ನು ಉಪದೇಶ ಮಾಡಬೇಕೆಂಬುದಕ್ಕೆ ಆ
ಬೋಧನೆಗಳೇ ನಿನಗೆ ದೃಷ್ಟಾಂತಗಳಾಗಿವೆ. 14 ನಿನ್ನ ವಶಕ್ಕೆ
ಕೊಟ್ಟಿರುವ ಸತ್ಯವನ್ನು ಪವಿತ್ರಾತ್ಮನ ಸಹಾಯದಿಂದ ಸಂರಕ್ಷಿಸು.
ಆತನು ನಮ್ಮೊಳಗೆ ವಾಸಮಾಡುತ್ತಿದ್ದಾನೆ.
15 ಏಷ್ಯಾ ದೇಶದಲ್ಲಿರುವವರೆಲ್ಲರೂ ನನ್ನನ್ನು ತೊರೆದಿರು
ವರೆಂಬುದು ನಿನಗೆ ತಿಳಿದಿದೆ. ಫುಗೇಲನೂ, ಹೆರ್ಮೊಗೇನನೂ
ನನ್ನನ್ನು ತೊರೆದಿದ್ದಾರೆ. 16 ಪ್ರಭುವು ಒನೇಸಿಫೋರನ
ಕುಟುಂಬಕ್ಕೆ ಕರುಣೆಯನ್ನು ತೋರಲಿ ಎಂದು ನಾನು ಪ್ರಾರ್ಥಿ
ಸುತ್ತೇನೆ. ಅವನು ಅನೇಕ ಸಂದರ್ಭಗಳಲ್ಲಿ ನನಗೆ ಸಹಾಯ
ಮಾಡಿದ್ದಾನೆ. ನಾನು ಸೆರೆಮನೆಯಲ್ಲಿದ್ದರೂ ಅವನು ನಾಚಿಕೆ
ಪಟ್ಟುಕೊಳ್ಳಲಿಲ್ಲ. 17 ಅವನು ರೋಮಿಗೆ ಬಂದಾಗ, ಬಹಳ
ಹುಡುಕಾಡಿ ನನ್ನನ್ನು ಸಂಧಿಸಿದನು. 18 ಆ ದಿನದಂದು
ಒನೇಸಿಫೋರನು ಪ್ರಭುವಿನಿಂದ ಕರುಣೆಯನ್ನು ಪಡೆಯಲಿ
ಎಂದು ನಾನು ಪ್ರಭುವಿನಲ್ಲಿ ಪ್ರಾರ್ಥಿಸುತ್ತೇನೆ. ಎಫೆಸದಲ್ಲಿ
ಅವನು ನನಗೆ ಎಷ್ಟು ವಿಧದಲ್ಲಿ ಸಹಾಯ ಮಾಡಿದನೆಂಬುದು
ನಿನಗೆ ತಿಳಿದಿದೆ.

2 ಕ್ರಿಸ್ತಯೇಸುವಿನ ನಿಷ್ಠಾವಂತ ಸೈನಿಕನಾಗಿರುವ ತಿಮೊಥೆ
ಯನೇ, ನೀನು ನನಗೆ ಮಗನಂತಿರುವೆ. ಕ್ರಿಸ್ತ ಯೇಸುವಿ
ನಲ್ಲಿರುವ ಕೃಪೆಯಿಂದ ಬಲ ಹೊಂದಿದವನಾಗು. 2 ನಾನು
ಉಪದೇಶಿಸಿದ ಸಂಗತಿಗಳನ್ನು ನೀನು ಕೇಳಿರುವೆ. ಅವುಗಳನ್ನು
ಇತರ ಅನೇಕ ಜನರೂ ಕೇಳಿದ್ದಾರೆ. ನೀನು ಆ ಸಂಗತಿಗಳನ್ನು

ಉಪದೇಶಿಸಬೇಕು. ನಿನಗೆ ನಂಬಿಗಸ್ತರಾದ ಕೆಲವರ ವಶಕ್ಕೆ ಆ
ಉಪದೇಶಗಳನ್ನು ಕೊಡು. ಆಗ ಅವರು ಆ ಸಂಗತಿಗಳನ್ನು
ಇತರರಿಗೆ ಉಪದೇಶಿಸಲು ಸಾಧ್ಯವಾಗುತ್ತದೆ. 3ನಮಗಿರುವ
ತೊಂದರೆಗಳಲ್ಲಿ ನೀನೂ ಪಾಲುಗಾರನಾಗು. ಕ್ರಿಸ್ತಯೇಸುವಿನ
ನಿಜವಾದ ಸೈನಿಕನಂತೆ ಆ ತೊಂದರೆಗಳನ್ನು ಸ್ವೀಕರಿಸು.
4ಸೈನಿಕನು ತನ್ನ ಸೈನ್ಯಾಧಿಕಾರಿಯನ್ನು ಮೆಚ್ಚಿಸಲು ಇಷ್ಟಪಡು
ತ್ತಾನೆ. ಆದ್ದರಿಂದ ಆ ಸೈನಿಕನು ಲೋಕವ್ಯವಹಾರದಲ್ಲಿ ಸಿಕ್ಕಿ
ಕೊಳ್ಳದಂತೆ ಎಚ್ಚರಿಕೆಯಿಂದಿರುವನು. 5ಓಟದ ಸ್ಪರ್ಧೆಯಲ್ಲಿ
ಗೆಲ್ಲಬೇಕಾದರೆ, ಓಟಗಾರನು ಎಲ್ಲಾ ನಿಯಮಗಳನ್ನು ಪಾಲಿಸ
ಬೇಕು. 6ಕಷ್ಟಪಟ್ಟು ಕೆಲಸಮಾಡುವ ರೈತನಿಗೆ ಬೆಳೆಯ ಪ್ರಥಮ
ಪಾಲು ದೊರೆಯಬೇಕು. 7ನಾನು ಹೇಳುತ್ತಿರುವ ಈ ಸಂಗತಿ
ಗಳನ್ನು ಕುರಿತು ಆಲೋಚಿಸು. ಈ ಸಂಗತಿಗಳನ್ನೆಲ್ಲ ಅರ್ಥಮಾಡಿ
ಕೊಳ್ಳುವ ವಿವೇಕವನ್ನು ಪ್ರಭುವು ನಿನಗೆ ದಯಪಾಲಿಸುವನು.

8ಯೇಸು ಕ್ರಿಸ್ತನನ್ನು ನೆನಪು ಮಾಡಿಕೊ. ಆತನು ದಾವೀದನ
ವಂಶದವನು. ಯೇಸು ಸತ್ತನಂತರ ಜೀವಂತವಾಗಿ ಮೇಲೆದ್ದು
ಬಂದನು. ಈ ಸುವಾರ್ತೆಯನ್ನೇ ನಾನು ಜನರಿಗೆ ತಿಳಿಸುತ್ತೇನೆ.
9ಈ ಕಾರಣದಿಂದಲೇ ಸಂಕಟವನ್ನು ಅನುಭವಿಸುತ್ತಿದ್ದೇನೆ.
ದುಷ್ಕರ್ಮಿಯಂತೆ ಸಂಕೋಲೆಗಳಿಂದ ಬಂಧಿಸಲ್ಪಟ್ಟಿದ್ದೇನೆ.
ಆದರೆ ದೇವರ ಉಪದೇಶಕ್ಕೆ ಬಂಧನವಿಲ್ಲ. 10ಆದುದರಿಂದ
ನಾನು ತಾಳ್ಮೆಯಿಂದಲೇ ಈ ತೊಂದರೆಗಳನ್ನು ಅಂಗೀಕರಿಸಿ
ದ್ದೇನೆ. ಏಕೆಂದರೆ ದೇವರು ಆರಿಸಿರುವ ಜನರೆಲ್ಲರಿಗೂ ಸಹಾಯ
ಮಾಡಬೇಕೆಂಬುದು ನನ್ನ ಅಪೇಕ್ಷೆಯಾಗಿದೆ. ಆ ಜನರು ಕ್ರಿಸ್ತ
ಯೇಸುವಿನಲ್ಲಿ ರಕ್ಷಣೆ ಪಡೆಯಲೆಂದು ನಾನು ಈ ತೊಂದರೆ
ಗಳನ್ನೆಲ್ಲ ಸ್ವೀಕರಿಸಿಕೊಂಡಿದ್ದೇನೆ. ಈ ರಕ್ಷಣೆಯೊಂದಿಗೆ ನಿತ್ಯ
ಪ್ರಭಾವವು ದೊರೆಯುತ್ತದೆ. 11ಈ ಉಪದೇಶವು ಸತ್ಯವಾದದ್ದು:

ನಾವು ಆತನೊಂದಿಗೆ (ಯೇಸು)ಸತ್ತಿದ್ದರೆ, ಆತ
ನೊಡನೆ ಜೀವಿಸುವೆವು.
12 ನಾವು ಸಂಕಟವನ್ನು ಸ್ವೀಕರಿಸಿಕೊಂಡರೆ, ಆತ
ನೊಡನೆ ಆಳುವೆವು. ನಾವು ಆತನನ್ನು ಸ್ವೀಕರಿಸಿ
ಕೊಳ್ಳದಿದ್ದರೆ, ಆತನೂ ನಮ್ಮನ್ನು ಸ್ವೀಕರಿಸಿ
ಕೊಳ್ಳುವುದಿಲ್ಲ.
13 ನಾವು ನಂಬಿಗಸ್ತರಾಗಿಲ್ಲದಿದ್ದರೂ, ಆತನು
ಇನ್ನೂ ನಂಬಿಗಸ್ತನಾಗಿರುವನು; ಏಕೆಂದರೆ
ಆತನು ತನ್ನ ಸ್ವಭಾವಕ್ಕೆ ವಿರುದ್ಧನಾಗಲಾರನು.

### ಯೋಗ್ಯನಾದ ಕೆಲಸಗಾರನು

14ಜನರಿಗೆ ಈ ಸಂಗತಿಗಳನ್ನು ತಿಳಿಸುತ್ತಲೇ ಇರು. ಪದಗಳ
ಬಗ್ಗೆ ವಾಗ್ವಾದ ಮಾಡಬಾರದೆಂದು ಅವರಿಗೆ ದೇವರ
ಸನ್ನಿಧಿಯಲ್ಲಿ ಎಚ್ಚರಿಕೆ ನೀಡು. ವಾಗ್ವಾದಗಳಿಂದ ಯಾರಿಗೂ
ಪ್ರಯೋಜನವಿಲ್ಲ. ವಾಗ್ವಾದವನ್ನು ಕೇಳುವ ಜನರು ಅದರಿಂದ
ನಾಶವಾಗುತ್ತಾರೆ. 15ದೇವರ ದೃಷ್ಟಿಯಲ್ಲಿ ಯೋಗ್ಯವ್ಯಕ್ತಿ
ಯಾಗಲು ನಿನ್ನಿಂದಾದಷ್ಟು ಪ್ರಯಾಸಪಡು ಮತ್ತು ನಿನ್ನನ್ನೇ
ಒಪ್ಪಿಸಿಕೊಡು. ತನ್ನ ಕೆಲಸದಲ್ಲಿ ನಾಚಿಕೆಪಡದಿರುವ ಕೆಲಸಗಾರ
ನಾಗು, ಅಂದರೆ ಸತ್ಯೋಪದೇಶವನ್ನು ಯೋಗ್ಯವಾದ ರೀತಿ
ಯಲ್ಲಿ ತಿಳಿಸುವವನಾಗು. 16ದೇವರಿಂದ ಬಂದಿಲ್ಲದ ನಿರರ್ಥಕ
ಸಂಗತಿಗಳನ್ನು ಮಾತನಾಡುವ ಜನರಿಂದ ದೂರವಾಗಿರು. ಆ
ರೀತಿಯ ಮಾತುಗಳು ಜನರನ್ನು ದೇವರಿಂದ ಮತ್ತಷ್ಟು ದೂರ
ಮಾಡುತ್ತವೆ. 17ಅವರ ಕೆಟ್ಟ ಉಪದೇಶಗಳು ದೇಹದಲ್ಲಿ
ಹರಡಿಕೊಳ್ಳುವ ಕಾಯಿಲೆಯಂತೆ ವ್ಯಾಪಿಸಿಕೊಳ್ಳುತ್ತವೆ.
ಹುಮೆನಾಯನು ಮತ್ತು ಫಿಲೇತನು ಅಂತಹ ಜನರು. 18ಅವರು
ಸತ್ಯೋಪದೇಶವನ್ನು ತಿರಸ್ಕರಿಸಿದರು. ಎಲ್ಲಾ ಜನರಿಗೆ ಉಂಟಾ
ಗುವ ಪುನರುತ್ಥಾನವು ಈಗಾಗಲೇ ಆಗಿಹೋಗಿದೆಯೆಂದು
ಅವರು ಹೇಳುತ್ತಾರೆ. ಅವರಿಬ್ಬರು ಕೆಲವು ಜನರ ನಂಬಿಕೆಯನ್ನು
ಹಾಳುಮಾಡುತ್ತಿದ್ದಾರೆ. 19ಆದರೆ ದೇವರ ಭದ್ರವಾದ
ಬುನಾದಿಯು ಬದಲಾಗುವುದೇ ಇಲ್ಲ. ‘‘ಪ್ರಭುವಿಗೆ ತನ್ನವರು
ಯಾರೆಂಬುದು ತಿಳಿದಿದೆ’’ * ಎಂತಲೂ ‘‘ಪ್ರಭುವಿನಲ್ಲಿ ನಂಬಿಕೆ
ಯಿಟ್ಟಿರುವವರೆಲ್ಲರೂ ದುರ್ಮಾರ್ಗತನವನ್ನು ಬಿಟ್ಟುಬಿಡ
ಬೇಕೆಂತಲೂ ಆ ಬುನಾದಿಯ ಮೇಲೆ ಕೆತ್ತಲಾಗಿದೆ.

20ದೊಡ್ಡ ಮನೆಗಳಲ್ಲಿ ಚಿನ್ನ, ಬೆಳ್ಳಿಗಳಿಂದ ಮಾಡಿದ ವಸ್ತು
ಗಳಿರುತ್ತವೆ. ಅಲ್ಲದೆ ಮರದಿಂದ, ಮಣ್ಣಿನಿಂದ ಮಾಡಿದ
ವಸ್ತುಗಳೂ ಇರುತ್ತವೆ. ಕೆಲವನ್ನು ವಿಶೇಷ ಕಾರ್ಯಕ್ಕಾಗಿ ಬಳಸು
ತ್ತಾರೆ. ಇತರ ವಸ್ತುಗಳನ್ನು ಹೀನವಾದ ಕಾರ್ಯಗಳಿಗೆ ಬಳಸು
ತ್ತಾರೆ. 21ಹೀಗಿರಲಾಗಿ ಒಬ್ಬನು ತನ್ನ ದುಷ್ಟಕಾರ್ಯಗಳನ್ನು
ತೊರೆದು ತನ್ನನ್ನು ಶುದ್ಧೀಕರಿಸಿಕೊಂಡರೆ ಅವನನ್ನು ಬಳಸ
ಲಾಗುವುದು. ಅವನು ದೇವರ ಸೇವೆಗೆ ಮೀಸಲಾಗುತ್ತಾನೆ;
ಯಜಮಾನನಿಗೆ ಉಪಯುಕ್ತನಾಗುತ್ತಾನೆ; ಸತ್ಕಾರ್ಯಗಳನ್ನು
ಕೈಕೊಳ್ಳಲು ಸಿದ್ಧನಾಗಿರುತ್ತಾನೆ.

22ಯುವಕರು ಇಷ್ಟಪಡುವ ಕೆಟ್ಟಕಾರ್ಯಗಳಿಂದ ನೀನು
ದೂರವಾಗಿರು. ಪ್ರೀತಿ, ನಂಬಿಕೆ, ಮತ್ತು ಶಾಂತಿಯನ್ನು ಹೊಂದಿ
ದವನಾಗಿದ್ದು ಯೋಗ್ಯವಾದ ರೀತಿಯಲ್ಲಿ ಜೀವಿಸಲು ಬಹಳ
ವಾಗಿ ಪ್ರಯತ್ನಪಡು. ಪ್ರಭುವಿನಲ್ಲಿ ಭರವಸೆವಿಟ್ಟಿರುವ ಮತ್ತು
ಪರಿಶುದ್ಧ ಹೃದಯ ಹೊಂದಿರುವ ಜನರೊಂದಿಗೆ ಒಟ್ಟುಗೂಡಿ
ಈ ಕಾರ್ಯಗಳನ್ನು ಮಾಡು. 23ಮೂಢತನದ ಮತ್ತು ಕ್ಷುಲ್ಲಕ
ವಾದ ವಾದವಿವಾದಗಳಿಂದ ದೂರವಾಗಿರು. ಆ ವಾಗ್ವಾದಗಳು
ಬೆಳೆದು ದೊಡ್ಡದಾಗುತ್ತವೆ ಎಂಬುದು ನಿನಗೆ ತಿಳಿದಿದೆ. 24ಪ್ರಭು
ವಿನ ಸೇವಕನು ವಾಗ್ವಾದ ಮಾಡಲೇಬಾರದು. ಅವನು ಪ್ರತಿ
ಯೊಬ್ಬರಿಗೂ ದಯೆತೋರಬೇಕು; ಒಳ್ಳೆಯ ಉಪದೇಶಕ
ನಾಗಿರಬೇಕು; ತಾಳ್ಮೆಯಿಂದಿರಬೇಕು. 25ಅವನು ತನ್ನೊಂದಿಗೆ
ಸಮ್ಮತಿಸದಿರುವ ಜನರಿಗೆ ಸಾತ್ವಿಕ ರೀತಿಯಲ್ಲಿ ಉಪದೇಶ
ಮಾಡಬೇಕು. ಅವರು ಸತ್ಯವನ್ನು ಅಂಗೀಕರಿಸಿಕೊಳ್ಳುವಂತೆ
ದೇವರು ಅವರ ಹೃದಯಗಳನ್ನು ಪರಿವರ್ತಿಸಬಲ್ಲನು.
26ಸೈತಾನನು ಆ ಜನರನ್ನು ತನ್ನ ಬಲೆಗೆ ಬೀಳಿಸಿ, ತನ್ನ ಅಪೇಕ್ಷೆಗೆ
ತಕ್ಕಂತೆ ಅವರಿಂದ ಕಾರ್ಯಗಳನ್ನು ಮಾಡಿಸುತ್ತಿದ್ದಾನೆ. ಆದರೆ
ಅವರು ಎಚ್ಚರಗೊಂಡು, ಸೈತಾನನು ತಮ್ಮನ್ನು ವಶಪಡಿಸಿ
ಕೊಂಡಿರುವುದನ್ನು ಗುರುತಿಸಬಹುದು ಹಾಗೂ ಸೈತಾನನ
ಬಲೆಯಿಂದ ತಪ್ಪಿಸಿಕೊಂಡು ಬಿಡುಗಡೆ ಹೊಂದಬಹುದು.

### ಕೊನೆಯ ದಿನಗಳು

3 ನೆನಪಿನಲ್ಲಿಡಿರಿ! ಕಡೇ ದಿನಗಳಲ್ಲಿ ಅನೇಕ ತೊಂದರೆಗಳು
ಬರುತ್ತವೆ. 2ಆ ಕಾಲದಲ್ಲಿ ಜನರು ಸ್ವಾರ್ಥಿಗಳಾಗಿರುತ್ತಾರೆ
ಹಣದಾಸೆ ಉಳ್ಳವರಾಗಿರುತ್ತಾರೆ; ಬಡಾಯಿ ಕೊಚ್ಚುವವ

**ಪ್ರಭುವಿಗಾಗಿ ... ತಿಳಿದಿದೆ** ಯಾಜಕ. 16:5.

ರಾಗಿರುತ್ತಾರೆ; ಗರ್ವಿಷ್ಟರಾಗಿರುತ್ತಾರೆ; ಚಾಡಿಕೋರರಾಗಿರು
ತ್ತಾರೆ; ತಂದೆತಾಯಿಗಳಿಗೆ ಅವಿಧೇಯರಾಗಿರುತ್ತಾರೆ; ಕೃತಜ್ಞತೆ
ಯಿಲ್ಲದವರಾಗಿರುತ್ತಾರೆ; ಅಪವಿತ್ರರಾಗಿರುತ್ತಾರೆ; 3ಇತರರನ್ನು
ಪ್ರೀತಿಸದವರಾಗಿರುತ್ತಾರೆ; ಕ್ಷಮಿಸದವರಾಗಿರುತ್ತಾರೆ;
ದೂಷಿಸುವವರಾಗಿರುತ್ತಾರೆ. ತಮ್ಮ ಮೇಲೆ ತಮಗೇ ಹತೋಟಿ
ಯಿಲ್ಲದವರಾಗಿರುತ್ತಾರೆ; ಉತ್ತಮವಾದದ್ದನ್ನು ದ್ವೇಷಿಸುವವ
ರಾಗಿರುತ್ತಾರೆ; ಕೋಪಿಷ್ಠರಾಗಿರುತ್ತಾರೆ; ಸಂಕುಚಿತ ಗುಣ
ವುಳ್ಳವರಾಗಿರುತ್ತಾರೆ. 4ಕೊನೆಯ ದಿನಗಳಲ್ಲಿ ಜನರು ಮಿತ್ರ
ದ್ರೋಹಿಗಳಾಗಿರುತ್ತಾರೆ; ದುಡುಕಿ ಮೂರ್ಖ ಕೆಲಸಗಳನ್ನು
ಮಾಡುವವರಾಗಿರುತ್ತಾರೆ; ಜಂಬದಿಂದ ಉಬ್ಬಿಕೊಂಡವ
ರಾಗಿರುತ್ತಾರೆ; ದೇವರನ್ನು ಪ್ರೀತಿಸದೆ ವಿಲಾಸ ಪ್ರಿಯರಾಗಿರು
ತ್ತಾರೆ; 5ಆ ಜನರು ತಾವು ದೇವರ ಸೇವೆ ಮಾಡುತ್ತಿರುವುದಾಗಿ
ನಟಿಸುತ್ತಲೇ ಇರುವರು. ಆದರೆ ಅವರು ನಿಜವಾಗಿಯೂ
ದೇವರ ಸೇವೆ ಮಾಡುತ್ತಿಲ್ಲವೆಂಬುದನ್ನು ಅವರ ಜೀವಿತವೇ
ತೋರ್ಪಡಿಸುತ್ತದೆ. ತಿಮೊಥೆಯನೇ, ಅಂತಹ ಜನರಿಂದ ದೂರ
ವಾಗಿರು. 6ಅವರಲ್ಲಿ ಕೆಲವರು ಮನೆಗಳಿಗೆ ನುಸುಳಿಕೊಂಡು
ಹೋಗಿ, ಪಾಪಿಷ್ಠರಾದ ಸ್ತ್ರೀಯರನ್ನು ವಶಪಡಿಸಿಕೊಳ್ಳುತ್ತಾರೆ.
ಆ ಸ್ತ್ರೀಯರು ತಮ್ಮ ಅನೇಕ ಪಾಪದೋಷಗಳಿಂದ ತುಂಬಿದವ
ರಾಗಿದ್ದಾರೆ. 7ಆ ಸ್ತ್ರೀಯರು ಯಾವಾಗಲೂ ಹೊಸ ಉಪದೇಶ
ಗಳನ್ನು ಕಲಿಯಲು ಪ್ರಯತ್ನಿಸಿದರೂ ಸತ್ಯವನ್ನು ಪೂರ್ಣವಾಗಿ
ಅರ್ಥಮಾಡಿಕೊಳ್ಳಲು ಅವರಿಗೆ ಸಾಧ್ಯವೇ ಇಲ್ಲ. 8ಯನ್ನ
ಯಂಬ್ರರನ್ನು ನೆನಪುಮಾಡಿಕೊ. ಅವರು ಮೋಶೆಯನ್ನು
ವಿರೋಧಿಸಿದರು. ಈ ಜನರೂ ಅವರಂತೆಯೇ. ಅವರು ಸತ್ಯ
ವನ್ನು ವಿರೋಧಿಸುವವರು. ಆ ಜನರ ಆಲೋಚನೆಗಳೆಲ್ಲ ಗಲಿ
ಬಿಲಿಗೊಂಡಿವೆ. ಅವರು ನಂಬಿಕೆಯನ್ನು ಅನುಸರಿಸುವ ತಮ್ಮ
ಪ್ರಯತ್ನದಲ್ಲಿ ಸೋತುಹೋಗಿದ್ದಾರೆ. 9ಅವರ ಕಾರ್ಯಗಳಲ್ಲಿ
ಅವರಿಗೆ ಯಶಸ್ಸಾಗುವುದಿಲ್ಲ. ಅವರು ಮೂರ್ಖರೆಂಬುದು
ಜನರೆಲ್ಲರಿಗೂ ಕಾಣುತ್ತದೆ. ಯನ್ನ, ಯಂಬ್ರರಿಗೆ ಹೀಗೆಯೇ
ಆಯಿತು.

## ಅಂತಿಮ ಸಲಹೆಗಳು

10ಆದರೆ ನನ್ನನ್ನು ಕುರಿತು ನಿನಗೆ ಎಲ್ಲವೂ ತಿಳಿದಿದೆ. ನನ್ನ
ಬೋಧನೆ, ನಡತೆ, ಉದ್ದೇಶ, ನಂಬಿಕೆ, ತಾಳ್ಮೆ, ಪ್ರೀತಿ, ಸೈರಣೆ
ನಿನಗೆ ತಿಳಿದಿವೆ. 11ನನಗೆ ಸಂಭವಿಸಿದ ಹಿಂಸೆ ಮತ್ತು ಸಂಕಟಗಳ
ಬಗ್ಗೆಯೂ ನಿನಗೆ ತಿಳಿದಿದೆ. ಅಂತಿಯೋಕ್ಯ, ಇಕೋನ್ಯ,
ಲುಸ್ತ್ರಗಳಲ್ಲಿ ನನಗೆ ಸಂಭವಿಸಿದ ಸಂಗತಿಗಳೆಲ್ಲವೂ ನಿನಗೆ
ತಿಳಿದಿವೆ. ನಾನು ಆ ಸ್ಥಳಗಳಲ್ಲಿ ಅನುಭವಿಸಿದ ಹಿಂಸೆಯು ನಿನಗೆ
ತಿಳಿದಿದೆ. ಆದರೆ ಆ ಎಲ್ಲ ತೊಂದರೆಗಳಿಂದ ಪ್ರಭುವು ನನ್ನನ್ನು
ಕಾಪಾಡಿದನು. 12ಕ್ರಿಸ್ತ ಯೇಸುವಿನಲ್ಲಿ ದೇವರ ಚಿತ್ತಕ್ಕನು
ಸಾರವಾಗಿ ಜೀವಿಸುವ ಪ್ರತಿಯೊಬ್ಬರೂ ಹಿಂಸೆಗೆ ಒಳಗಾಗು
ವರು. 13ದುಷ್ಟರು ಮತ್ತು ದುರ್ಬೋಧಕರು ಇತರರನ್ನು
ವಂಚಿಸುತ್ತಾ ತಮ್ಮನ್ನೂ ವಂಚಿಸಿಕೊಳ್ಳುತ್ತಾ ದಿನದಿಂದ ದಿನಕ್ಕೆ
ಕೀಳುಮಟ್ಟಕ್ಕೆ ಇಳಿಯುತ್ತಿದ್ದಾರೆ.
14ಆದರೆ ನೀನು ಕಲಿತಿರುವ ಉಪದೇಶಗಳನ್ನು ಅನುಸರಿಸು.
ಅವು ಸತ್ಯವೆಂಬುದು ನಿನಗೆ ತಿಳಿದಿದೆ. ಅವುಗಳನ್ನು ನಿನಗೆ ಕಲಿಸಿದ
ಜನರು ನಂಬಿಕೆಗೆ ಯೋಗ್ಯರೆಂಬುದು ನಿನಗೆ ತಿಳಿದಿದೆ.
15ಚಿಕ್ಕಂದಿನಿಂದಲೂ ನಿನಗೆ ಪವಿತ್ರ ಗ್ರಂಥದ ಪರಿಚಯವಿದೆ.
ನಿನ್ನನ್ನು ಜ್ಞಾನಿಯನ್ನಾಗಿ ಮಾಡಲು ಆ ಪವಿತ್ರ ಗ್ರಂಥವು ಶಕ್ತ
ವಾಗಿದೆ. ಕ್ರಿಸ್ತ ಯೇಸುವಿನಲ್ಲಿನ ನಂಬಿಕೆಯ ಮೂಲಕ ಆ
ಜ್ಞಾನವು ರಕ್ಷಣೆಯ ಕಡೆಗೆ ನಡೆಸುತ್ತದೆ. 16ಪವಿತ್ರ ಗ್ರಂಥವನ್ನು
ದೇವರು ದಯಪಾಲಿಸಿದನು. ಉಪದೇಶವನ್ನು ಮಾಡುವು
ದಕ್ಕೂ ಖಂಡನೆಗೂ ತಿದ್ದುಪಾಟಿಗೂ ನೀತಿಬೋಧೆಗೂ ಅದು
ಉಪಯುಕ್ತವಾಗಿದೆ. 17ಆದ್ದರಿಂದ ದೇವರ ಸೇವಕರು ಸಿದ್ಧರೂ
ಸಕಲ ಸತ್ಕಾರ್ಯಗಳಿಗೆ ಸನ್ನದ್ಧರೂ ಆಗಬಲ್ಲರು.

4 ಜೀವಂತರಾಗಿರುವ ಜನರಿಗೂ ಸತ್ತುಹೋಗಿರುವ ಜನ
ರಿಗೂ ನ್ಯಾಯತೀರಿಸುವಾತನು ಕ್ರಿಸ್ತಯೇಸುವೇ. ಆತನು
ತನ್ನ ರಾಜ್ಯವನ್ನು ಹೊಂದಿದ್ದಾನೆ. ಆತನು ಮತ್ತೆ ಬರುವನು.
ಆದ್ದರಿಂದ ಯೇಸು ಕ್ರಿಸ್ತನ ಮತ್ತು ದೇವರ ಸನ್ನಿಧಿಯಲ್ಲಿ ನಾನು
ನಿನಗೆ ಆಜ್ಞಾಪಿಸುವುದೇನಂದರೆ, 2ಸುವಾರ್ತೆಯನ್ನು ಜನರಿಗೆ
ತಿಳಿಸು. ಕಾಲವು ಅನುಕೂಲವಾಗಿದ್ದರೂ ಅನಾನುಕೂಲ
ವಾಗಿದ್ದರೂ ಬೋಧನೆಯನ್ನು ಮುಂದುವರಿಸು. ಜನರು
ಮಾಡಬೇಕಾದುದನ್ನು ಅವರಿಗೆ ತಿಳಿಸು. ಅವರು ತಪ್ಪು
ಮಾಡಿದಾಗ ಅದನ್ನು ಅವರಿಗೆ ತೋರಿಸಿಕೊಡು. ಅವರನ್ನು
ಗದರಿಸು, ಇವುಗಳನ್ನು ಬಹಳ ತಾಳ್ಮೆಯಿಂದಲೂ ಎಚ್ಚರಿಕೆ
ಯಿಂದಲೂ ಮಾಡು. 3ಜನರು ಸತ್ಯೋಪದೇಶವನ್ನು ಕೇಳ
ದಿರುವ ಕಾಲವು ಬರಲಿದೆ. ಜನರು ತಮ್ಮನ್ನು ಮೆಚ್ಚಿಸುವಂಥ
ಬೋಧಕರನ್ನು ಮತ್ತು ತಮ್ಮ ಕಿವಿಗೆ ಹಿತವೆನಿಸುವ ಬೋಧನೆ
ಯನ್ನು ನೀಡುವ ಬೋಧಕರನ್ನು ಕಂಡುಕೊಳ್ಳುವರು. 4ಜನರು
ಸತ್ಯವನ್ನು ಕೇಳದೆ ಸುಳ್ಳು ಕಥೆಗಳನ್ನು ಕೇಳಲಾರಂಭಿಸುತ್ತಾರೆ.
5ಆದರೆ ನೀನು ಎಲ್ಲಾ ಕಾಲದಲ್ಲಿಯೂ ಸ್ವಸ್ಥಚಿತ್ತನಾಗಿರು.
ತೊಂದರೆಗಳು ಬಂದಾಗ ಸಹಿಸಿಕೊ. ಸುವಾರ್ತೆಯನ್ನು ಪ್ರಚಾರ
ಮಾಡು. ದೇವರ ಸೇವಕನಿಗೆ ಯೋಗ್ಯವಾದ ಎಲ್ಲಾ ಕಾರ್ಯ
ಗಳನ್ನು ಮಾಡುತ್ತಿರು.
6ನನ್ನ ಜೀವಿತವನ್ನು ದೇವರಿಗಾಗಿ ಅರ್ಪಿಸುತ್ತಿದ್ದೇನೆ. ನಾನು
ಈ ಲೋಕವನ್ನು ಬಿಟ್ಟುಹೋಗುವ ಕಾಲವು ಸಮೀಪಿಸಿದೆ.
7ಶ್ರೇಷ್ಠ ಹೋರಾಟವನ್ನು ಮಾಡಿದ್ದೇನೆ. ಪಂದ್ಯದಲ್ಲಿ ನನ್ನ ಓಟ
ವನ್ನು ಮುಗಿಸಿದ್ದೇನೆ; ನನ್ನ ನಂಬಿಕೆಯನ್ನು ಕಾಪಾಡಿಕೊಂಡಿ
ದ್ದೇನೆ. 8ನೀತಿವಂತರಿಗೆ ದೊರೆಯುವ ಜಯಮಾಲೆಯು ಈಗ
ನನಗೆ ಸಿದ್ಧವಾಗಿದೆ. ನೀತಿಯುಳ್ಳ ನ್ಯಾಯಾಧಿಪತಿಯಾಗಿರುವ
ಪ್ರಭುವೇ ನನಗೆ ಆದನ್ನು ಆ ದಿನದಂದು ಕೊಡುವನು. ನನಗೆ
ಮಾತ್ರವಲ್ಲದೆ ಆತನ ಬರುವಿಕೆಯನ್ನು ಅಪೇಕ್ಷಿಸಿ ಅದಕ್ಕಾಗಿ
ಕಾಯುತ್ತಿದ್ದವರಿಗೆಲ್ಲ ಆತನು ಆ ಜಯಮಾಲೆಯನ್ನು ದಯ
ಪಾಲಿಸುವನು.

## ವೈಯಕ್ತಿಕ ಮಾತುಗಳು

9ನಿನಗೆ ಸಾಧ್ಯವಾದಷ್ಟು ಬೇಗನೆ ನನ್ನ ಬಳಿಗೆ ಬಾ. 10ದೇಮನು
ಈ ಲೋಕವನ್ನು ಬಹಳ ಪ್ರೀತಿಸಿದನು. ಆದಕಾರಣವೇ ಅವನು
ನನ್ನನ್ನು ಬಿಟ್ಟು ಥೆಸಲೋನಿಕಕ್ಕೆ ಹೋದನು. ಕ್ರೆಸ್ಕನು ಗಲಾತ್ಯಕ್ಕೆ
ಹೋದನು. ತೀತನು ದಲ್ಮಾತ್ಯಕ್ಕೆ ಹೋದನು. 11ಲೂಕ
ನೊಬ್ಬನು ಮಾತ್ರ ನನ್ನ ಜೊತೆಯಲ್ಲಿದ್ದಾನೆ. ನೀನು ಬರುವಾಗ
ಮಾರ್ಕನನ್ನೂ ನಿನ್ನ ಜೊತೆಯಲ್ಲಿ ಕರೆದುಕೊಂಡು ಬಾ. ಆವನು
ನನ್ನ ಸೇವೆಗೆ ಸಹಾಯ ಮಾಡಬಲ್ಲನು. 12ತುಖಿಕನನ್ನು ಎಫೆಸಕ್ಕೆ
ಕಳುಹಿಸಿದೆನು. 13ನಾನು ತ್ರೋವದಲ್ಲಿದ್ದಾಗ ಕರ್ಪನ ಬಳಿ ನನ್ನ
ಮೇಲಂಗಿಯನ್ನು ಬಿಟ್ಟು ಬಂದಿದ್ದೇನೆ. ನೀನು ನನ್ನ ಬಳಿಗೆ

ಬರುವಾಗ ಅದನ್ನು ತೆಗೆದುಕೊಂಡು ಬಾ. ನನ್ನ ಪುಸ್ತಕಗಳನ್ನೂ ಮುಖ್ಯವಾಗಿ, ಕುರಿಚರ್ಮದಿಂದ ಮಾಡಿದ ಪುಸ್ತಕಗಳನ್ನು ತೆಗೆದು ಕೊಂಡು ಬಾ.

14ಕಂಚುಗಾರನಾದ ಅಲೆಗ್ಸಾಂಡರನು ನನಗೆ ಅನೇಕ ಕೆಡಕುಗಳನ್ನು ಮಾಡಿದನು. ಅವನು ಮಾಡಿದ ಕೃತ್ಯಗಳಿಗಾಗಿ ಪ್ರಭುವು ಅವನನ್ನು ದಂಡಿಸುವನು. 15ಅವನು ನಿನಗೂ ತೊಂದರೆ ಕೊಡಲಾಗದಂತೆ ಎಚ್ಚರವಾಗಿರು. ಅವನು ನಮ್ಮ ಉಪದೇಶದ ವಿರುದ್ಧ ಬಹಳ ಹೋರಾಡಿದನು.

16ಮೊದಲ ಸಲ ನಾನು ನನ್ನನ್ನು ಸಮರ್ಥಿಸಿಕೊಂಡಾಗ, ನನಗೆ ಯಾರೂ ಸಹಾಯಮಾಡಲಿಲ್ಲ. ಎಲ್ಲರೂ ನನ್ನನ್ನು ಬಿಟ್ಟು ಹೋದರು. ದೇವರು ಅವರನ್ನು ಕ್ಷಮಿಸಲಿ ಎಂದು ಪ್ರಾರ್ಥಿಸುತ್ತೇನೆ. 17ಆದರೆ ಪ್ರಭುವು ನನ್ನ ಬಳಿಯೇ ಇದ್ದನು. ನಾನು ಸುವಾರ್ತೆಯನ್ನು ಯೆಹೂದ್ಯರಲ್ಲದವರಿಗೆ ಸಂಪೂರ್ಣವಾಗಿ ಬೋಧಿಸಲು ಪ್ರಭುವು ನನಗೆ ಶಕ್ತಿಯನ್ನು ದಯಪಾಲಿಸಿದನು. ಆ ಸುವಾರ್ತೆಯನ್ನು ಯೆಹೂದ್ಯರಲ್ಲದ ಜನರೆಲ್ಲರೂ ಕೇಳುವುದು ಪ್ರಭುವಿನ ಇಷ್ಟವಾಗಿತ್ತು. ಆತನು ನನ್ನನ್ನು ಸಿಂಹದ (ಶತ್ರು) ಬಾಯಿಂದ ರಕ್ಷಿಸಿದನು. 18ಯಾರಾದರೂ ನನಗೆ ತೊಂದರೆ ಮಾಡಲು ಪ್ರಯತ್ನಿಸಿದರೆ, ಪ್ರಭುವು ನನ್ನನ್ನು ರಕ್ಷಿಸುವನು. ಪ್ರಭುವು ನನ್ನನ್ನು ಸುರಕ್ಷಿತವಾಗಿ ತನ್ನ ಪರಲೋಕರಾಜ್ಯಕ್ಕೆ ಸೇರಿಸುವನು. ಯುಗಯುಗಾಂತರಗಳಲ್ಲಿಯೂ ಪ್ರಭುವಿಗೆ ಮಹಿಮೆಯಾಗಲಿ.

### ಅಂತಿಮ ವಂದನೆಗಳು

19ಪ್ರಿಸ್ಕಳಿಗೆ, ಅಕ್ವಿಲ್ಲನಿಗೆ ಮತ್ತು ಒನೇಸಿಫೋರನ ಮನೆಯವರಿಗೆ ವಂದನೆಗಳನ್ನು ಹೇಳು. 20ಎರಸ್ತನು ಕೊರಿಂಥದಲ್ಲಿ ನೆಲಸಿದನು. ತ್ರೊಫಿಮನು ಅಸ್ವಸ್ಥನಾಗಿದ್ದುದರಿಂದ ನಾನು ಅವನನ್ನು ಮಿಲೇತದಲ್ಲಿ ಇರಿಸಬೇಕಾಯಿತು. 21ಚಳಿಗಾಲಕ್ಕೆ ಮುಂಚೆಯೇ ನನ್ನ ಬಳಿಗೆ ಬರಲು ನಿನ್ನಿಂದಾದಷ್ಟು ಪ್ರಯತ್ನಿಸು. ಯುಬೂಲ, ಪೊದೇಯ, ಲೀನ, ಕ್ಲೌದ್ಯ, ಇವರುಗಳು ಮತ್ತು ಇತರ ಸಹೋದರರೆಲ್ಲರೂ ನಿನಗೆ ವಂದನೆಗಳನ್ನು ಹೇಳಿದ್ದಾರೆ. 22ಪ್ರಭುವು ನಿನ್ನ ಆತ್ಮದ ಸಂಗಡ ಇರಲಿ. ಆತನ ಕೃಪೆಯು ನಿನ್ನೊಂದಿಗಿರಲಿ.

# ತೀತನಿಗೆ ಬರೆದ ಪತ್ರ

1 ದೇವರ ಸೇವಕನಾದ ಮತ್ತು ಯೇಸು ಕ್ರಿಸ್ತನ ಅಪೊಸ್ತಲ
ನಾದ ಪೌಲನು ಬರೆಯುವ ಪತ್ರ. ದೇವರು ಆರಿಸಿಕೊಂಡ
ಜನರ ನಂಬಿಕೆಯನ್ನು ವೃದ್ಧಿಗೊಳಿಸುವುದಕ್ಕಾಗಿ ಮತ್ತು ಅವರಿಗೆ
ಸತ್ಯವನ್ನು ತಿಳಿಸುವುದಕ್ಕಾಗಿ ನನ್ನನ್ನು ಕಳುಹಿಸಲಾಯಿತು.
ದೇವರ ಸೇವೆಯನ್ನು ಹೇಗೆ ಮಾಡಬೇಕೆಂಬುದನ್ನು ಆ ಸತ್ಯವು
ತೋರ್ಪಡಿಸುತ್ತಿದೆ. 2 ನಿತ್ಯಜೀವದ ಮೇಲೆ ನಮಗಿರುವ ನಿರೀಕ್ಷೆ
ಯಿಂದಲೇ ಆ ನಂಬಿಕೆ ಮತ್ತು ಜ್ಞಾನಗಳು ಉಂಟಾಗಿವೆ.
ನಿತ್ಯಜೀವವನ್ನು ಕೊಡುವುದಾಗಿ ದೇವರು ನಮಗೆ ಅನಾದಿಕಾಲ
ದಲ್ಲಿಯೇ ವಾಗ್ದಾನ ಮಾಡಿದ್ದನು. ದೇವರು ಸುಳ್ಳು ಹೇಳು
ವುದಿಲ್ಲ. 3 ತಕ್ಕಕಾಲ ಬಂದಾಗ ದೇವರು ಆ ನಿತ್ಯಜೀವವನ್ನು
ಲೋಕಕ್ಕೆ ಪ್ರಕಟಿಸಿ ನನಗೊಪ್ಪಿಸಿರುವ ಈ ಸಂದೇಶವನ್ನು ನಮ್ಮ
ರಕ್ಷಕನಾದ ದೇವರ ಆಜ್ಞೆಗನುಸಾರವಾಗಿ ಸಾರುತ್ತಿದ್ದೇನೆ.
4 ನಾನು ಈ ಪತ್ರವನ್ನು ತೀತನಿಗೆ ಬರೆಯುತ್ತಿದ್ದೇನೆ. ನಮ್ಮೆಲ್ಲರ
ನಂಬಿಕೆಯ ಸಂಬಂಧದಲ್ಲಿ ನೀನು ನನಗೆ ನಿಜವಾದ ಮಗ
ನಂತಿರುವೆ.

ನಮ್ಮ ತಂದೆಯಾದ ದೇವರಿಂದಲೂ ನಮ್ಮ ರಕ್ಷಕನಾದ ಕ್ರಿಸ್ತ
ಯೇಸುವಿನಿಂದಲೂ ನಿನಗೆ ಕೃಪೆಯೂ ಶಾಂತಿಯೂ ಲಭಿಸಲಿ.

### ಕ್ರೇತದಲ್ಲಿ ತೀತನ ಕಾರ್ಯ

5 ಇನ್ನೂ ಪೂರ್ಣವಾಗಿಲ್ಲದ ಕಾರ್ಯಗಳನ್ನು ಪೂರ್ಣ
ಗೊಳಿಸುವುದಕ್ಕಾಗಿಯೂ ಪ್ರತಿಯೊಂದು ಪಟ್ಟಣದಲ್ಲಿ ಸಭಾ
ಹಿರಿಯರನ್ನು ಆರಿಸುವುದಕ್ಕಾಗಿಯೂ ನಾನು ನಿನ್ನನ್ನು ಕ್ರೇತ
ದಲ್ಲಿ ಬಿಟ್ಟುಬಂದೆನು. 6 ಸಭೆಯ ಹಿರಿಯನಾಗುವವನು
ಅಪರಾಧಿಯೆಂಬ ನಿಂದನೆಗೆ ಗುರಿಯಾಗಿರಬಾರದು. ಅವನಿಗೆ
ಒಬ್ಬಳೇ ಪತ್ನಿಯಿರಬೇಕು. ಅವನ ಮಕ್ಕಳು ವಿಶ್ವಾಸಿಗಳಾಗಿರ
ಬೇಕು; ಅವರು ದುಷ್ಟರೆಂದಾಗಲಿ ಅವಿಧೇಯರೆಂದಾಗಲಿ
ಹೇಳಿಸಿಕೊಂಡಿರಬಾರದು. 7 ಸಭಾಹಿರಿಯನು ದೇವರ
ಸೇವೆಯ ಜವಾಬ್ದಾರಿಯನ್ನು ಹೊತ್ತುಕೊಂಡವನಾಗಿದ್ದಾನೆ.
ಆದ್ದರಿಂದ ಅವನು ಅಪರಾಧಿಯೆಂಬ ನಿಂದನೆಗೆ ಒಳಗಾಗಿರ
ಬಾರದು; ಗರ್ವಿಷ್ಠನಾಗಿರಬಾರದು; ಸ್ವಾರ್ಥಿಯಾಗಿರಬಾರದು
ಮತ್ತು ಮುಂಗೋಪಿಯಾಗಿರಬಾರದು; ದ್ರಾಕ್ಷಾರಸವನ್ನು
ಅತಿಯಾಗಿ ಕುಡಿಯುವವನಾಗಿರಬಾರದು; ಜಗಳಗಂಟನಾಗಿರ
ಬಾರದು; ಜನರನ್ನು ವಂಚಿಸಿ ಶ್ರೀಮಂತನಾಗಲು ಪ್ರಯತ್ನಿಸು
ವವನಾಗಿರಬಾರದು. 8 ಸಭಾಹಿರಿಯನು ಜನರನ್ನು ತನ್ನ ಮನೆಗೆ
ಆಹ್ವಾನಿಸಿ ಅತಿಥಿಸತ್ಕಾರ ಮಾಡಲು ಸಿದ್ಧನಾಗಿರಬೇಕು. ಅವನು
ಒಳ್ಳೆಯದನ್ನು ಪ್ರೀತಿಸಬೇಕು; ಜ್ಞಾನಿಯಾಗಿರಬೇಕು;
ನ್ಯಾಯವಂತನಾಗಿರಬೇಕು; ಪವಿತ್ರನಾಗಿರಬೇಕು. ಅವನು
ತನ್ನನ್ನು ಹತೋಟಿಯಲ್ಲಿ ಇಟ್ಟುಕೊಂಡಿರಬೇಕು. 9 ನಾವು
ಬೋಧಿಸುವ ಸತ್ಯವಾಕ್ಯವನ್ನು ಅವನು ನಂಬಿಗಸ್ತಿಕೆಯಿಂದ
ಅನುಸರಿಸಬೇಕು. ಸತ್ಯವಾದ ಮತ್ತು ಯೋಗ್ಯವಾದ
ಬೋಧನೆಯಿಂದ ಅವನು ಜನರಿಗೆ ಸಹಾಯ ಮಾಡುವವ
ನಾಗಿರಬೇಕು. ಅವನು ಸತ್ಯಬೋಧನೆಗೆ ವಿರುದ್ಧವಾದ ಜನರಿಗೆ
ಅವರ ತಪ್ಪನ್ನು ತೋರಿಸಿಕೊಡುವ ಸಾಮರ್ಥ್ಯ ಉಳ್ಳವ
ನಾಗಿರಬೇಕು.

10 ಅವಿಧೇಯರಾಗಿರುವ ಜನರು ಅನೇಕರಿದ್ದಾರೆ. ಅವರು
ನಿರರ್ಥಕವಾದುದನ್ನು ಕುರಿತು ಮಾತನಾಡುತ್ತಲೇ ಇರುತ್ತಾರೆ
ಮತ್ತು ಉಳಿದ ಜನರನ್ನು ತಪ್ಪುದಾರಿಗೆ ಎಳೆಯುತ್ತಾರೆ.
ಯೆಹೂದ್ಯರಲ್ಲದ ಜನರೆಲ್ಲರೂ ಸುನ್ನತಿ ಮಾಡಿಸಿಕೊಳ್ಳ
ಬೇಕೆಂದು ಬೋಧಿಸುವ ಜನರ ಬಗ್ಗೆಯೇ ನಾನು ಹೇಳು
ತ್ತಿರುವುದು.

11 ಆ ಜನರ ಬೋಧನೆ ತಪ್ಪೆಂದು ನಿರೂಪಿಸಲು ಮತ್ತು
ಉಪಯೋಗವಿಲ್ಲದ ಆ ಸಂಗತಿಗಳನ್ನು ಬೋಧಿಸದಂತೆ
ಮಾಡಲು ಸಭಾಹಿರಿಯನು ಸಮರ್ಥನಾಗಿರಬೇಕು. ಅವರು
ಉಪದೇಶ ಮಾಡಬಾರದ ಸಂಗತಿಗಳನ್ನು ಉಪದೇಶಿಸುತ್ತಾ
ಇಡೀ ಕುಟುಂಬಗಳನ್ನೇ ಸಂಪೂರ್ಣವಾಗಿ ನಾಶಗೊಳಿಸು
ತ್ತಿದ್ದಾರೆ. ಅವರು ಜನರನ್ನು ವಂಚಿಸಿ, ಹಣವನ್ನು ಸಂಪಾದಿಸು
ವುದಕ್ಕೋಸ್ಕರ ಆ ಸಂಗತಿಗಳನ್ನು ಉಪದೇಶಿಸುತ್ತಿದ್ದಾರೆ.
12 ಅವರ ಪ್ರವಾದಿಗಳಲ್ಲಿ ಒಬ್ಬನು, ‘‘ಕ್ರೇತದ ಜನರು ಯಾವಾ
ಗಲೂ ಸುಳ್ಳು ಹೇಳುತ್ತಾರೆ. ಅವರು ದುಷ್ಟ ಮೃಗಗಳಾಗಿದ್ದಾರೆ;
ಸೋಮಾರಿತನದಿಂದ ಕೆಲಸವನ್ನೇ ಮಾಡದೆ ಹೊಟ್ಟೆಬಾಕ
ರಾಗಿದ್ದಾರೆ’’ ಎಂದು ಹೇಳಿದ್ದಾನೆ. 13 ಪ್ರವಾದಿಯು ಹೇಳಿದ
ಮಾತುಗಳು ಸತ್ಯವಾಗಿವೆ. ಆದ್ದರಿಂದ ಅವರು ಮಾಡುತ್ತಿರುವ
ತಪ್ಪುಗಳನ್ನು ಅವರಿಗೆ ತಿಳಿಸು. ನೀನು ಅವರ ವಿಷಯದಲ್ಲಿ
ಕಟ್ಟುನಿಟ್ಟಾಗಿರಬೇಕು. ಆಗ ಅವರು ತಮ್ಮ ನಂಬಿಕೆಯಲ್ಲಿ
ದೃಢವಾಗಿದ್ದು, 14 ಯೆಹೂದ್ಯರ ಕಟ್ಟುಕಥೆಗಳನ್ನು ಒಪ್ಪಿಕೊಳ್ಳು
ವುದಿಲ್ಲ ಮತ್ತು ಸತ್ಯವನ್ನು ಒಪ್ಪಿಕೊಳ್ಳದ ಜನರ ಆಜ್ಞೆಗಳನ್ನು
ಅನುಸರಿಸುವುದಿಲ್ಲ. 15 ಪರಿಶುದ್ಧರಾದ ಜನರಿಗೆ ಎಲ್ಲಾ ಸಂಗತಿ
ಗಳು ಪರಿಶುದ್ಧವಾಗಿರುತ್ತವೆ. ಆದರೆ ಪಾಪಗಳನ್ನೇ ತುಂಬಿ
ಕೊಂಡಿರುವ ಮತ್ತು ನಂಬಿಕೆಯಿಲ್ಲದ ಜನರಿಗೆ ಯಾವುದೂ
ಪರಿಶುದ್ಧವಾಗಿರುವುದಿಲ್ಲ. ನಿಜವಾಗಿಯೂ, ಅವರ ಮನಸ್ಸು
ಗಳು ಮತ್ತು ಮನಸ್ಸಾಕ್ಷಿಗಳು ಮಲಿನವಾಗಿವೆ. 16 ದೇವರ ಬಗ್ಗೆ
ತಮಗೆ ತಿಳಿದಿದೆಯೆಂದು ಅವರು ಹೇಳಿದರೂ ಅವರು
ದೇವರನ್ನು ತಿಳಿದಿಲ್ಲವೆಂದು ಅವರ ಕೆಟ್ಟಕಾರ್ಯಗಳೇ ಸ್ಪಷ್ಟ
ಪಡಿಸುತ್ತವೆ. ಅವರು ಭಯಂಕರವಾದ ಜನರು ಮತ್ತು
ಅವಿಧೇಯರು. ಯಾವ ಸತ್ಕಾರ್ಯಗಳನ್ನು ಮಾಡುವುದಕ್ಕೂ
ಅವರು ಯೋಗ್ಯರಲ್ಲ.

## ಸತ್ಯಬೋಧನೆಯನ್ನು ಅನುಸರಿಸಿರಿ

2 ಸತ್ಯಬೋಧನೆಯನ್ನು ಅನುಸರಿಸಲು ಜನರು ಮಾಡ
ಬೇಕಾದ ಕಾರ್ಯಗಳನ್ನು ಅವರಿಗೆ ನೀನು ತಿಳಿಸು. 2ವೃದ್ಧ
ರಾದವರು ಜಿತೇಂದ್ರಿಯರೂ ಗಂಭೀರ ಸ್ವಭಾವದವರೂ ಜ್ಞಾನಿ
ಗಳೂ ಆಗಿರಬೇಕೆಂದು ತಿಳಿಸು. ಅವರು ತಮ್ಮ ನಂಬಿಕೆಯಲ್ಲಿ,
ಪ್ರೀತಿಯಲ್ಲಿ ಮತ್ತು ತಾಳ್ಮೆಯಲ್ಲಿ ಬಲವಾಗಿರಬೇಕೆಂದು ತಿಳಿಸು.
3ಅಂತೆಯೇ ವೃದ್ಧ ಸ್ತ್ರೀಯರು ಸಭ್ಯರಾಗಿ ವರ್ತಿಸಬೇಕು.
ಅವರು ಚಾಡಿ ಹೇಳಬಾರದು; ಮದ್ಯಾಸಕ್ತರಾಗಿರಬಾರದು.
ಅವರು ಒಳ್ಳೆಯದನ್ನೇ ಉಪದೇಶಿಸಬೇಕು. 4ಅವರು ಗೃಹಿಣಿ
ಯರಿಗೆ, ''ನಿಮ್ಮ ಗಂಡಂದಿರನ್ನು ಮತ್ತು ಮಕ್ಕಳನ್ನು ಪ್ರೀತಿಸಿರಿ.
5ಜ್ಞಾನವುಳ್ಳವರಾಗಿರಿ, ಪರಿಶುದ್ಧರಾಗಿರಿ, ನಿಮ್ಮ ಮನೆಕೆಲಸ
ವನ್ನು ನೋಡಿಕೊಳ್ಳಿರಿ, ದಯೆಯುಳ್ಳವರಾಗಿರಿ, ನಿಮ್ಮ
ಗಂಡಂದಿರಿಗೆ ವಿಧೇಯರಾಗಿರಿ'' ಎಂದು ಉಪದೇಶಿಸಬೇಕು.
ಆಗ ದೇವರು ನಮಗೆ ದಯಪಾಲಿಸಿದ ಬೋಧನೆಯನ್ನು
ಟೀಕಿಸಲು ಯಾರಿಗೂ ಸಾಧ್ಯವಾಗುವುದಿಲ್ಲ.
6ಇದೇ ರೀತಿಯಲ್ಲಿ ಯುವಕರಿಗೆ ಜ್ಞಾನಿಗಳಾಗಿರಲು ತಿಳಿಸು.
7ನೀನು ಒಳ್ಳೆಯ ಕಾರ್ಯಗಳನ್ನು ಮಾಡುತ್ತಾ ಯುವಕರಿಗೆ
ಸರ್ವವಿಧದಲ್ಲಿಯೂ ಮಾದರಿಯಾಗಿರಬೇಕು. ನಿನ್ನ ಉಪದೇಶ
ದಲ್ಲಿ ಯಥಾರ್ಥತೆಯನ್ನು ಮತ್ತು ಗಂಭೀರತೆಯನ್ನು ತೋರಿಸಿ
ಕೊಡು.
8ನೀನು ಸತ್ಯವನ್ನೇ ಮಾತನಾಡು. ಆಗ ನಿನ್ನನ್ನು ಟೀಕಿಸಲು
ಸಾಧ್ಯವಿಲ್ಲದೆ ನಿನ್ನ ವಿರೋಧಿಗಳು ಅಪಮಾನಕ್ಕೆ
ಗುರಿಯಾಗುವರು.
9ಗುಲಾಮರಿಗೆ ಈ ಸಂಗತಿಗಳನ್ನು ತಿಳಿಸು: ಅವರು ತಮ್ಮ
ಯಜಮಾನರಿಗೆ ಯಾವಾಗಲೂ ವಿಧೇಯರಾಗಿದ್ದು ಅವರನ್ನು
ಮೆಚ್ಚಿಸಲು ಪ್ರಯತ್ನಿಸಬೇಕು. ಅವರು ತಮ್ಮ ಯಜಮಾನರ
ಜೊತೆಯಲ್ಲಿ ವಾಗ್ವಾದ ಮಾಡಬಾರದು; 10ಅವರು ವಸ್ತುಗಳನ್ನು
ಕದಿಯಬಾರದು; ಮತ್ತು ತಾವು ನಂಬಿಗಸ್ತರೆಂಬುದನ್ನು
ತೋರಿಸಿಕೊಡಬೇಕು. ಗುಲಾಮರು ಹೀಗೆ ನಡೆದು ಕೊಳ್ಳುವು
ದಾದರೆ, ಅವರು ಮಾಡುವ ಪ್ರತಿಯೊಂದು ಕೆಲಸದಲ್ಲಿಯೂ
ನಮ್ಮ ರಕ್ಷಕನಾದ ದೇವರ ಉಪದೇಶವು ಶ್ರೇಷ್ಠವಾದುದೆಂದು
ತೋರ್ಪಡಿಸಲು ಸಾಧ್ಯವಾಗುತ್ತದೆ.
11ಎಲ್ಲರಿಗೂ ರಕ್ಷಣೆಯನ್ನು ಕೊಡುವ ದೇವರ ಕೃಪೆಯು
ಪ್ರತ್ಯಕ್ಷವಾಯಿತು. 12ನಾವು ದೇವರಿಗೆ ವಿರುದ್ಧವಾಗಿ ಜೀವಿಸ
ದಂತೆಯೂ ಲೋಕದ ಜನರು ಮಾಡಲಪೇಕ್ಷಿಸುವ ಕೆಟ್ಟ
ಕಾರ್ಯಗಳನ್ನು ಮಾಡದಂತೆಯೂ ಅದು ತಡೆಯುತ್ತದೆ. ನಾವು
ದೇವರ ಸೇವೆಯನ್ನು ಮಾಡುತ್ತಿದ್ದೇವೆ ಎಂಬುದನ್ನು ತೋರಿಸು
ವುದಕ್ಕಾಗಿ ನೀತಿವಂತರಾಗಿಯೂ ಜ್ಞಾನಿಗಳಾಗಿಯೂ ಲೋಕ
ದಲ್ಲಿ ಈಗ ಬಾಳಬೇಕೆಂದು ಅದು ಬೋಧಿಸುತ್ತದೆ. 13ನಮ್ಮ
ಮಹಾದೇವರ ಮತ್ತು ರಕ್ಷಕನಾದ ಯೇಸು ಕ್ರಿಸ್ತನ ಪ್ರತ್ಯಕ್ಷತೆ
ಯನ್ನು ಎದುರುನೋಡುತ್ತಿರುವ ನಾವು ಆ ರೀತಿಯಲ್ಲಿಯೇ
ಬಾಳಬೇಕು. ಆತನೇ ನಮ್ಮ ಮಹಾ ನಿರೀಕ್ಷೆಯಾಗಿದ್ದಾನೆ.
ಆತನು ತನ್ನ ಮಹಿಮೆಯೊಂದಿಗೆ ಬರುತ್ತಾನೆ. 14ಆತನು ನಮ
ಗೋಸ್ಕರ ತನ್ನನ್ನು ಒಪ್ಪಿಸಿಕೊಟ್ಟನು. ನಮ್ಮನ್ನು ಪಾಪದಿಂದ
ಬಿಡುಗಡೆ ಮಾಡಲು ಮತ್ತು ಯಾವಾಗಲೂ ಒಳ್ಳೆಯ ಕಾರ್ಯ
ಗಳನ್ನೇ ಮಾಡಬಯಸುವ ತನ್ನ ಪರಿಶುದ್ಧ ಜನರನ್ನಾಗಿ ಮಾಡಲು
ಆತನು ಮರಣ ಹೊಂದಿದನು.
15ಈ ಸಂಗತಿಗಳನ್ನು ಜನರಿಗೆ ತಿಳಿಸಲು ನಿನಗೆ ಸಂಪೂರ್ಣ
ಅಧಿಕಾರವಿದೆ. ಜನರನ್ನು ಬಲಗೊಳಿಸಲು ಈ ಅಧಿಕಾರವನ್ನು
ಬಳಸಿಕೊಂಡು, ಅವರು ಮಾಡಬೇಕಾದುದನ್ನು ತಿಳಿಸು. ನೀನು
ಮುಖ್ಯನಾದವನಲ್ಲವೆಂದು ಯಾರೂ ನಿನ್ನನ್ನು ಪರಿಗಣಿಸದಂತೆ
ನೋಡಿಕೊ.

## ಜೀವಿಸಲು ಯೋಗ್ಯವಾದ ಮಾರ್ಗ

3 ನೀನು ಜನರಿಗೆ ತಿಳಿಸಬೇಕಾದದ್ದೇನಂದರೆ: ನಿಮ್ಮ
ಅಧಿಪತಿಗಳಿಗೂ ಅಧಿಕಾರಿಗಳಿಗೂ ಅಧೀನರಾಗಿರಿ; ಸಕಲ
ಸತ್ಕಾರ್ಯಗಳನ್ನು ಮಾಡಲು ಸಿದ್ಧರಾಗಿರಿ. 2ಯಾರನ್ನೂ
ದೂಷಿಸದೆ, ಯಾರೊಂದಿಗೂ ಜಗಳವಾಡದೆ ಮೃದುವಾಗಿ ಎಲ್ಲ
ರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಿರಿ.
3ಮೊದಲು ನಾವು ಸಹ ಅವಿವೇಕಿಗಳಾಗಿದ್ದೆವು. ನಾವು
ವಿಧೇಯರಾಗಿರಲಿಲ್ಲ. ನಾವು ಮೋಸಹೋಗಿದ್ದೆವು. ಅನೇಕ
ಬಗೆಯ ಆಸೆಗಳಿಗೆ ಮತ್ತು ಭೋಗಗಳಿಗೆ ದಾಸರಾಗಿದ್ದೆವು;
ಕೆಟ್ಟದ್ದನ್ನು ಮಾಡುವವರೂ ಹೊಟ್ಟೆಕಿಚ್ಚುಳ್ಳವರೂ ಆಗಿದ್ದೆವು.
ಜನರು ನಮ್ಮನ್ನು ದ್ವೇಷಿಸುತ್ತಿದ್ದರು. ನಾವು ಒಬ್ಬರನ್ನೊಬ್ಬರು
ದ್ವೇಷಿಸುತ್ತಿದ್ದೆವು. 4ಆಗ ನಮ್ಮ ರಕ್ಷಕನಾದ ದೇವರ ಪ್ರೀತಿಯೂ
ಕೃಪೆಯೂ ಪ್ರತ್ಯಕ್ಷವಾದವು. 5ಆತನು ನಮ್ಮನ್ನು ರಕ್ಷಿಸಿದ್ದು ತನ್ನ
ಕರುಣೆಯಿಂದಲೇ ಹೊರತು ನೀತಿವಂತರಾಗಲು ನಾವು
ಮಾಡಿದ ಒಳ್ಳೆಯ ಕಾರ್ಯಗಳಿಂದಲ್ಲ. ಆತನು ನಮ್ಮನ್ನು
ಸ್ನಾನದ ಮೂಲಕವಾಗಿಯೂ ಪವಿತ್ರಾತ್ಮನ ಮೂಲಕ
ವಾಗಿಯೂ ಹೊಸಬರನ್ನಾಗಿ ಮಾಡಿ ರಕ್ಷಿಸಿದನು. 6ನಮ್ಮ ರಕ್ಷಕ
ನಾದ ಯೇಸು ಕ್ರಿಸ್ತನ ಮೂಲಕ ದೇವರು ಪವಿತ್ರಾತ್ಮನನ್ನು ನಮ್ಮ
ಮೇಲೆ ಸಮೃದ್ಧಿಯಾಗಿ ಸುರಿಸಿದನು. 7ದೇವರು ತನ್ನ ಕೃಪೆಯಿಂದ
ನಮ್ಮನ್ನು ನೀತಿವಂತರನ್ನಾಗಿ ಮಾಡಿದನು. ನಾವು ನಿತ್ಯಜೀವ
ವನ್ನು ಪಡೆಯುವಂತೆ ಆತನು ನಮಗೆ ಪವಿತ್ರಾತ್ಮನನ್ನು ಕೊಟ್ಟನು.
ಅದೇ ನಮ್ಮ ನಿರೀಕ್ಷೆ. 8ಈ ಬೋಧನೆಯು ಸತ್ಯವಾದದ್ದು.
ನೀನು ಜನರಿಗೆ ಈ ಸಂಗತಿಗಳನ್ನು ಒತ್ತಿಹೇಳಬೇಕೆಂದು
ನಾನು ಅಪೇಕ್ಷಿಸುತ್ತೇನೆ. ಆಗ, ದೇವರಲ್ಲಿ ನಂಬಿಕೆ ಇಟ್ಟಿರು
ವವರು ಜಾಗರೂಕರಾಗಿದ್ದು ತಮ್ಮ ಜೀವನದಲ್ಲಿ ಒಳ್ಳೆಯ
ಕಾರ್ಯಗಳನ್ನು ಮಾಡುವರು. ಇವು ಎಲ್ಲರಿಗೂ ಹಿತಕರವಾಗಿವೆ
ಮತ್ತು ಪ್ರಯೋಜನಕರವಾಗಿವೆ.
9ಬುದ್ಧಿಯಿಲ್ಲದೆ ಕುತರ್ಕ ಮಾಡುವ ಜನರಿಂದ, ನಿರರ್ಥಕ
ವಾದ ವಂಶಾವಳಿಗಳ ಚರಿತ್ರೆಯ ಬಗ್ಗೆ ಮಾತನಾಡುವ
ಜನರಿಂದ, ಮೋಶೆಯು ಬರೆದಿರುವ ಧರ್ಮಶಾಸ್ತ್ರದಲ್ಲಿರುವ
ನಿಯಮಗಳ ಬಗ್ಗೆ ತೊಂದರೆಯನ್ನು ಉಂಟುಮಾಡುವ ಮತ್ತು
ಹೋರಾಡುವ ಜನರಿಂದ ದೂರವಾಗಿರು. ಅವುಗಳಿಗೆ ಯಾವ
ಬೆಲೆಯೂ ಇಲ್ಲ. ಅವುಗಳಿಂದ ಜನರಿಗೆ ಯಾವ ಪ್ರಯೋ
ಜನವೂ ಇಲ್ಲ.
10ಯಾವನಾದರೂ ಭೇದ ಹುಟ್ಟಿಸುತ್ತಿದ್ದರೆ, ಅವನಿಗೆ
ಎಚ್ಚರಿಕೆ ನೀಡು. ಅವನಿನ್ನೂ ಮುಂದುವರಿಸಿದರೆ ಮತ್ತೊಮ್ಮೆ
ಎಚ್ಚರಿಕೆ ನೀಡು. ಆದರೂ ಅವನು ಕೇಳದೆಹೋದರೆ ಅವನ
ಸಹವಾಸವನ್ನು ತೊರೆದುಬಿಡು. 11ಅಂಥವನು ಕೆಟ್ಟವನೂ
ಪಾಪಪೂರಿತನೂ ಆಗಿದ್ದಾನೆ ಎಂಬುದು ನಿನಗೂ ತಿಳಿದಿದೆ.
ಅವನು ತನ್ನ ಸ್ವಕಾರ್ಯಗಳಿಂದಲೇ ತಪ್ಪಿತಸ್ಥನೆಂಬ ತೀರ್ಪನ್ನು
ಹೊಂದಿದ್ದಾನೆ.

### ನೆನಪಿನಲ್ಲಿಡಬೇಕಾದ ಕೆಲವು ಸಂಗತಿಗಳು

[12]ನಾನು ನಿನ್ನ ಬಳಿಗೆ ಅರ್ತೆಮನನ್ನು ಮತ್ತು ತುಖಿಕನನ್ನು
ಕಳುಹಿಸಿದಾಗ, ನಿಕೊಪೊಲಿಯಲ್ಲಿರುವ ನನ್ನ ಬಳಿಗೆ ಬರಲು
ಆದಷ್ಟು ಪ್ರಯತ್ನಿಸು. ನಾನು ಈ ಚಳಿಗಾಲವನ್ನು ಅಲ್ಲಿಯೇ
ಕಳೆಯಬೇಕೆಂದಿದ್ದೇನೆ. [13]ವಕೀಲನಾದ ಜೇನನೂ ಅಪೊ
ಲ್ಲೋಸನೂ ಅಲ್ಲಿಂದ ಪ್ರಯಾಣ ಮಾಡುತ್ತಾರೆ. ಅವರ
ಪ್ರಯಾಣಕ್ಕೆ ನಿನ್ನಿಂದ ಸಾಧ್ಯವಾದಷ್ಟು ಸಹಾಯ ಮಾಡು.
ಅವರಿಗೆ ಯಾವ ಕೊರತೆಯೂ ಆಗದಂತೆ ನೋಡಿಕೊ. [14]ನಮ್ಮ
ಜನರು ತಮ್ಮ ಜೀವನದಲ್ಲಿ ಒಳ್ಳೆಯ ಕಾರ್ಯಗಳನ್ನು
ಮಾಡುವುದನ್ನು ಕಲಿಯಬೇಕು. ಕೊರತೆಯಲ್ಲಿರುವ ಜನರಿಗೆ
ಅವರು ಉಪಕಾರ ಮಾಡುವವರಾಗಿರಬೇಕು. ಆಗ ನಮ್ಮ ಜನರ
ಜೀವನವು ನಿಷ್ಪ್ರಯೋಜಕವಾಗಿರುವುದಿಲ್ಲ.

[15]ಇಲ್ಲಿ ನನ್ನೊಡನೆ ಇರುವ ಜನರೆಲ್ಲರೂ ನಿನಗೆ ವಂದನೆ
ಹೇಳುತ್ತಾರೆ. ಕ್ರಿಸ್ತನಲ್ಲಿ ನಂಬಿಕೆ ಇಟ್ಟವರಾಗಿದ್ದು ನಮ್ಮನ್ನು
ಪ್ರೀತಿಸುವವರಿಗೆಲ್ಲ ನಮ್ಮ ವಂದನೆ ತಿಳಿಸು.

ದೇವರ ಕೃಪೆಯು ನಿಮ್ಮೊಂದಿಗಿರಲಿ.

# ಫಿಲೆಮೋನನಿಗೆ ಬರೆದ ಪತ್ರ

ಯೇಸು ಕ್ರಿಸ್ತನ ನಿಮಿತ್ತ ಸೆರೆಯಲ್ಲಿರುವ ಪೌಲನೂ
ಸಹೋದರನಾದ ತಿಮೊಥೆಯನೂ ನಮಗೆ ಪ್ರಿಯನಾದ ಮತ್ತು
ನಮ್ಮ ಜೊತೆ ಕೆಲಸದವನಾದ ಫಿಲೆಮೋನನಿಗೆ, 2ಸಹೋದರಿ
ಯಾದ ಅಪ್ಫಿಯಳಿಗೆ, ನಮ್ಮ ಜೊತೆ ಸೈನಿಕನಾದ ಅರ್ಖಿಪ್ಪನಿಗೆ
ಮತ್ತು ಫಿಲೆಮೋನನ ಮನೆಯಲ್ಲಿ ಸೇರಿಬರುವ ಸಭೆಯವ
ರೆಲ್ಲರಿಗೆ ಬರೆಯುವ ಪತ್ರ. 3ನಮ್ಮ ತಂದೆಯಾದ ದೇವರ ಮತ್ತು
ಪ್ರಭುವಾದ ಯೇಸು ಕ್ರಿಸ್ತನ ಕೃಪೆಯೂ ಶಾಂತಿಯೂ
ನಿಮ್ಮೊಂದಿಗಿರಲಿ.

### ಫಿಲೆಮೋನನ ಪ್ರೀತಿ ಮತ್ತು ನಂಬಿಕೆ

4ನನ್ನ ಪ್ರಾರ್ಥನೆಗಳಲ್ಲಿ ನಿನ್ನನ್ನು ನೆನಪು ಮಾಡಿಕೊಳ್ಳು
ತ್ತಿರುತ್ತೇನೆ. ಯಾವಾಗಲೂ ನಿನಗಾಗಿ ದೇವರಿಗೆ ಸ್ತೋತ್ರ
ಸಲ್ಲಿಸುತ್ತೇನೆ. 5ದೇವರ ಪರಿಶುದ್ಧ ಜನರ ಮೇಲೆ ನಿನಗಿರುವ
ಪ್ರೀತಿಯನ್ನು ಮತ್ತು ಪ್ರಭುವಾದ ಯೇಸುವಿನಲ್ಲಿ ನಿನಗಿರುವ
ನಂಬಿಕೆಯನ್ನು ಕೇಳಿದ್ದರಿಂದ ದೇವರಿಗೆ ಸ್ತೋತ್ರ ಸಲ್ಲಿಸುತ್ತೇನೆ.
6ನೀನು ನಿನ್ನ ನಂಬಿಕೆಯನ್ನು ಹಂಚಿಕೊಳ್ಳುವುದರಲ್ಲಿ ಕಾರ್ಯ
ನಿರತನಾಗಿರುವುದರ ಮೂಲಕ ಕ್ರಿಸ್ತನಲ್ಲಿ ನಮಗಿರುವ ಎಲ್ಲಾ
ಸುವರಗಳನ್ನು ಅರ್ಥಮಾಡಿಕೊಳ್ಳುವಂತಾಗಲೆಂದು ಪ್ರಾರ್ಥಿಸು
ತ್ತೇನೆ. 7ನನ್ನ ಸಹೋದರನೇ, ದೇವಜನರಿಗೆ ನೀನು ಪ್ರೀತಿ
ಯನ್ನು ತೋರಿಸಿ ಅವರ ಹೃದಯಗಳನ್ನು ಸಂತೈಸಿರುವೆ. ಇದು
ನನಗೆ ಹೆಚ್ಚಿನ ಸಂತಸವನ್ನೂ ನೆಮ್ಮದಿಯನ್ನೂ ತಂದುಕೊಟ್ಟಿದೆ.

### ಒನೇಸಿಮನನ್ನು ಸಹೋದರನಂತೆ ಸೇರಿಸಿಕೊ

8ನೀನು ಮಾಡಬೇಕಾದ ಕಾರ್ಯವೊಂದಿದೆ. ಅದನ್ನು
ಮಾಡಬೇಕೆಂದು ಆಜ್ಞಾಪಿಸಲು ನನಗೆ ಕ್ರಿಸ್ತನಲ್ಲಿ ಅಧಿಕಾರವಿದೆ.
9ಆದರೆ ನಾನು ನಿನಗೆ ಆಜ್ಞಾಪಿಸದೆ ಪ್ರೀತಿಯಿಂದ ನಿನ್ನನ್ನು
ಕೇಳಿಕೊಳ್ಳುತ್ತಿದ್ದೇನೆ. ನಾನೇ ಪೌಲನು. ನಾನೀಗ ಮುದುಕ
ನಾಗಿದ್ದೇನೆ ಮತ್ತು ಕ್ರಿಸ್ತ ಯೇಸುವಿನ ನಿಮಿತ್ತ ಸೆರೆಯಲ್ಲಿದ್ದೇನೆ.
10ನನ್ನ ಮಗನಾದ ಒನೇಸಿಮನಿಗಾಗಿ ನಿನ್ನನ್ನು ಕೇಳಿಕೊಳ್ಳತ್ತೇನೆ.
ನಾನು ಸೆರೆಮನೆಯಲ್ಲಿರುವಾಗ ಅವನು ನನ್ನ ಮಗನಾದನು.
11ಹಿಂದೆ ಅವನು ನಿನಗೆ ನಿಷ್ಪ್ರಯೋಜಕನಾಗಿದ್ದನು. ಆದರೆ ಈಗ
ಅವನು ನಿನಗೂ ನನಗೂ ಪ್ರಯೋಜನ ಉಳ್ಳವನಾಗಿದ್ದಾನೆ.
12ಅವನನ್ನು ನಿನ್ನ ಬಳಿಗೆ ಹಿಂದಕ್ಕೆ ಕಳುಹಿಸುತ್ತಿದ್ದೇನೆ. ಅವ
ನೊಂದಿಗೆ ನನ್ನ ಹೃದಯವನ್ನೇ ಕಳುಹಿಸುತ್ತಿದ್ದೇನೆ. 13ನಾನೀಗ
ಸುವಾರ್ತೆಗೋಸ್ಕರ ಸೆರೆಯಲ್ಲಿರುವಾಗ ನನ್ನ ಸಹಾಯಕ್ಕೆ
ಅವನನ್ನು ಇರಿಸಿಕೊಳ್ಳಬೇಕೆಂದಿದ್ದೆನು. ಇಲ್ಲಿ ಅವನು ನನಗೆ
ಸಹಾಯ ಮಾಡುತ್ತಾ ನಿನ್ನ ಸೇವೆಯನ್ನೂ ಮಾಡಬಹುದಾಗಿತ್ತು.
14ಆದರೆ ಈ ವಿಷಯದಲ್ಲಿ ನಿನ್ನ ಒಪ್ಪಿಗೆ ಪಡೆಯದೆ ನಿರ್ಧಾರ
ತೆಗೆದುಕೊಳ್ಳಲು ನನಗೆ ಇಷ್ಟವಿಲ್ಲ. ಏಕೆಂದರೆ ನೀನು ಮಾಡುವ
ಒಳ್ಳೆಕಾರ್ಯವು ಮನಃಪೂರ್ವಕವಾಗಿರಬೇಕೇ ಹೊರತು
ಬಲತ್ಕಾರದಿಂದಾಗಕೂಡದು. 15ಒನೇಸಿಮನು ಸ್ವಲ್ಪಕಾಲ
ನಿನ್ನನ್ನು ಅಗಲಿದ್ದನು. ಬಹುಶಃ ಅವನು ಎಂದೆಂದಿಗೂ ನಿನ್ನವ
ನಾಗಬೇಕೆಂದು ಹಾಗಾಯಿತೇನೊ! 16ಇನ್ನು ಮೇಲೆ ಅವನು
ನಿನಗೆ ಕೇವಲ ಗುಲಾಮನಾಗಿರದೆ ಗುಲಾಮನಿಗಿಂತಲೂ ಹೆಚ್ಚಿನ
ಪ್ರಿಯ ಸಹೋದರನಾಗಿದ್ದಾನೆ. ಅವನನ್ನು ಬಹಳವಾಗಿ ಪ್ರೀತಿಸು
ತ್ತೇನೆ. ಆದರೆ ನೀನು ಅವನನ್ನು ಮತ್ತಷ್ಟು ಹೆಚ್ಚಾಗಿ ಪ್ರೀತಿಸುವೆ.
ನೀನು ಅವನನ್ನು ಮನುಷ್ಯನೆಂದು ಮತ್ತು ಪ್ರಭುವಿನಲ್ಲಿ ಒಬ್ಬ
ಸಹೋದರನೆಂದು ಪ್ರೀತಿಸುವೆ. 17ನನ್ನನ್ನು ನಿನ್ನ ಸಹಭಾಗಿ
ಯೆಂದು ನೀನು ಒಪ್ಪಿಕೊಳ್ಳುವುದಾದರೆ, ಒನೇಸಿಮನನ್ನು ಮತ್ತೆ
ಸೇರಿಸಿಕೊ. ನೀನು ನನ್ನನ್ನು ಬರಮಾಡಿಕೊಂಡಂತೆ ಅವನನ್ನೂ
ಬರಮಾಡಿಕೊ. 18ಅವನು ನಿನಗೇನಾದರೂ ತಪ್ಪು ಮಾಡಿದ್ದರೆ
ಅದನ್ನು ನನ್ನ ಮೇಲೆ ಹೊರಿಸು; ನಿನಗೇನಾದರೂ ಕೊಡ
ಬೇಕಿದ್ದರೆ, ಅದನ್ನು ನನ್ನ ಲೆಕ್ಕಕ್ಕೆ ಹಾಕು. 19ನಾನೇ ಪೌಲನು.
ನನ್ನ ಸ್ವಂತ ಕೈಗಳಿಂದ ಇದನ್ನು ಬರೆಯುತ್ತಿದ್ದೇನೆ. ಒನೇಸಿಮನು
ನಿನಗೆ ಏನಾದರೂ ಕೊಡಬೇಕಾಗಿದ್ದರೆ ನಾನು ಅದನ್ನು ನಿನಗೆ
ಕೊಡುತ್ತೇನೆ. ನಿನ್ನ ಆತ್ಮಿಕ ಜೀವಿತದ ವಿಷಯದಲ್ಲಿ ನೀನು
ನನಗೆಷ್ಟು ಋಣಿಯಾಗಿರುವೆ ಎಂದು ನಾನೇನೂ ಹೇಳುವುದಿಲ್ಲ.
20ನನ್ನ ಸಹೋದರನೇ, ಪ್ರಭುವಿನಲ್ಲಿ ನಾನು ನಿನ್ನಿಂದ ಒಂದು
ಸಹಾಯವನ್ನು ಹೊಂದಿಕೊಳ್ಳಬಹುದೇ? ಅದೇನಂದರೆ ನೀನು
ನನ್ನ ಹೃದಯವನ್ನು ಕ್ರಿಸ್ತನಲ್ಲಿ ಸಂತೈಸು. 21ನಾನು ಕೇಳಿಕೊಂಡ
ದ್ದನ್ನು ನೀನು ಮಾಡುವೆ ಎಂದು ನನಗೆ ಗೊತ್ತಿರುವುದರಿಂದಲೇ
ನಾನು ಈ ಪತ್ರವನ್ನು ಬರೆಯುತ್ತಿದ್ದೇನೆ. ನಾನು ಕೇಳಿದ್ದ
ಕ್ಕಿಂತಲೂ ಹೆಚ್ಚಿಗೆ ನೀನು ಮಾಡುವೆ ಎಂದು ನನಗೆ ತಿಳಿದಿದೆ.
22ನಾನು ಇಳಿದುಕೊಳ್ಳಲು ಒಂದು ಕೊಠಡಿಯನ್ನು ದಯವಿಟ್ಟು
ಸಿದ್ಧಗೊಳಿಸು. ದೇವರು ನಿನ್ನ ಪ್ರಾರ್ಥನೆಗಳನ್ನು ಕೇಳಿ ನನ್ನನ್ನು
ನಿಮ್ಮ ಬಳಿಗೆ ಬರಲು ಅವಕಾಶ ನೀಡುವನೆಂಬ ಭರವಸೆ
ನನಗಿದೆ.

### ಅಂತಿಮ ವಂದನೆಗಳು

23ಕ್ರಿಸ್ತಯೇಸುವಿನ ನಿಮಿತ್ತ ನನ್ನೊಂದಿಗೆ ಸೆರೆಮನೆಯ
ಲ್ಲಿರುವ ಎಪಫ್ರನು ವಂದನೆ ತಿಳಿಸಿದ್ದಾನೆ. 24ಮಾರ್ಕ, ಆರಿ
ಸ್ತಾರ್ಕ, ದೇಮ, ಲೂಕ ಇವರುಗಳು ನಿನಗೆ ವಂದನೆ ತಿಳಿಸಿದ್ದಾರೆ.
ಇವರೆಲ್ಲರೂ ನನ್ನ ಜೊತೆಕೆಲಸಗಾರರಾಗಿದ್ದಾರೆ. 25ನಮ್ಮ ಪ್ರಭು
ವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮ ಆತ್ಮದೊಂದಿಗಿರಲಿ.

# ಇಬ್ರಿಯರಿಗೆ ಬರೆದ ಪತ್ರ

**ದೇವರು ತನ್ನ ಮಗನ ಮೂಲಕ ಮಾತನಾಡಿದನು**

1 ಪೂರ್ವಕಾಲದಲ್ಲಿ ದೇವರು ಪ್ರವಾದಿಗಳ ಮೂಲಕ ನಮ್ಮ
ಜನರೊಂದಿಗೆ ಹಲವಾರು ವಿಧದಲ್ಲಿ ಅನೇಕ ಸಲ ಮಾತ
ನಾಡಿದನು. [2]ಈಗ ಕೊನೆಯ ದಿನಗಳಲ್ಲಿ ದೇವರು ಮತ್ತೆ ನಮ್ಮ
ಜೊತೆಯಲ್ಲಿ ತನ್ನ ಮಗನ ಮೂಲಕ ಮಾತನಾಡಿದನು. ದೇವರು
ತನ್ನ ಮಗನ ಮೂಲಕ ಲೋಕವನ್ನೆಲ್ಲ ಸೃಷ್ಟಿಸಿ, ಸಮಸ್ತಕ್ಕೂ ಆತ
ನನ್ನೇ ಬಾಧ್ಯಸ್ತನನ್ನಾಗಿ ಮಾಡಿದನು. [3]ದೇವರ ಮಹಿಮೆಯು
ಆತನಲ್ಲಿ ತೋರಿಬಂದಿತು. ಆತನು ದೇವರ ಸ್ವಭಾವದ ಪ್ರತಿ
ರೂಪನಾಗಿದ್ದಾನೆ. ಆತನು ತನ್ನ ಶಕ್ತಿಯ ಆಜ್ಞೆಯಿಂದ ಪರಿ
ಪಾಲಿಸುತ್ತಿದ್ದಾನೆ. ಆತನು ಜನರನ್ನು ಅವರ ಪಾಪಗಳಿಂದ
ಶುದ್ಧಿಮಾಡಿ, ಸ್ವರ್ಗದಲ್ಲಿ ಮಹತ್ವವುಳ್ಳ ದೇವರ ಬಲಗಡೆಯಲ್ಲಿ
ಆಸನಾರೂಢನಾದನು. [4]ದೇವರು ಆತನಿಗೆ ದೇವದೂತರಿಗಿಂತ
ಎಷ್ಟೋ ಶ್ರೇಷ್ಠವಾದ ಹೆಸರನ್ನು ದಯಪಾಲಿಸಿದನು. ಆತನು
ದೇವದೂತರಿಗಿಂತ ಅಷ್ಟೊಂದು ಶ್ರೇಷ್ಠನಾದನು.
[5]ದೇವರು ಯಾವ ದೂತರಿಗೂ ಈ ಸಂಗತಿಗಳನ್ನು ಎಂದೂ
ಹೇಳಿಲ್ಲ:

> ‘‘ನೀನು ನನ್ನ ಮಗ; ಇಂದು ನಾನು ನಿನ್ನ ತಂದೆಯಾದೆನು.’’
>
> *ಕೀರ್ತನೆ 2:7*

ದೇವರು ದೂತನೊಬ್ಬನಿಗೆ ಎಂದೂ ಹೀಗೆ ಹೇಳಿಲ್ಲ:

> ‘‘ನಾನು ಅವನ ತಂದೆಯಾಗಿರುವೆನು, ಅವನು ನನ್ನ ಮಗನಾಗಿರುವನು.’’
>
> *2 ಸಮುವೇಲ 7:14*

[6]ದೇವರು ತನ್ನ ಚೊಚ್ಚಲ ಮಗನನ್ನು ಈ ಲೋಕಕ್ಕೆ
ಬರಮಾಡುವಾಗ, ಆತನು ಹೇಳುವುದೇನಂದರೆ,

> ‘‘ದೇವದೂತರೆಲ್ಲರೂ ಆತನನ್ನು ಆರಾಧಿಸಲಿ.’’
>
> *ಧರ್ಮೋಪದೇಶಕಾಂಡ 32:43*

[7]ದೇವರು ತನ್ನ ದೂತರನ್ನು ಕುರಿತು ಹೇಳಿದ್ದು ಹೀಗಿದೆ:

> ‘‘ದೇವರು ತನ್ನ ದೂತರನ್ನು ಗಾಳಿಗಳನ್ನಾಗಿ ಮಾಡಿದನು. ಆತನು ತನ್ನ ಸೇವಕರನ್ನು ಬೆಂಕಿಯ ಜ್ವಾಲೆಗಳಂತೆ ಮಾಡಿದನು.’’
>
> *ಕೀರ್ತನೆ 104:4.*

[8]ಆದರೆ ದೇವರು ತನ್ನ ಮಗನನ್ನು ಕುರಿತು ಹೀಗೆ ಹೇಳಿದನು:

> ‘‘ದೇವರೇ, ನಿನ್ನ ಸಿಂಹಾಸನವು ಯುಗಯುಗಾಂತರಗಳಲ್ಲೂ ಇರುವುದು. ನೀನು ನಿನ್ನ ರಾಜ್ಯವನ್ನು ಸಮರ್ಪಕವಾದ ತೀರ್ಪುಗಳೊಡನೆ ಆಳುವೆ.
>
> 9 ನೀನು ಒಳ್ಳೆಯದನ್ನು ಪ್ರೀತಿಸುವೆ, ಕೆಟ್ಟದ್ದನ್ನು ದ್ವೇಷಿಸುವೆ. ಆದುದರಿಂದ ದೇವರು, ಹೌದು, ನಿನ್ನ ದೇವರೇ ನಿನ್ನನ್ನು ನಿನ್ನ ಸಂಗಡಿಗರಿಗಿಂತ ಉನ್ನತಸ್ಥಾನಕ್ಕೆ ಏರಿಸಿ ಪರಮಾನಂದದ ತೈಲದಿಂದ ಅಭಿಷೇಕಿಸಿದ್ದಾನೆ.’’
>
> *ಕೀರ್ತನೆ 45:6-7*

[10]ಇದಲ್ಲದೆ ದೇವರು ಇಂತೆನ್ನುತ್ತಾನೆ:

> ‘‘ಪ್ರಭುವೇ, ಆದಿಯಲ್ಲಿ ನೀನು ಈ ಲೋಕವನ್ನು ಸೃಷ್ಟಿಸಿದೆ. ಗಗನಮಂಡಲವು ನಿನ್ನ ಕೈ ಕೆಲಸವಾಗಿದೆ.
>
> 11 ಇವೆಲ್ಲವು ಅದೃಶ್ಯವಾಗುವವು, ಆದರೆ ನೀನು ದೃಶ್ಯನಾಗಿಯೇ ಉಳಿಯುವೆ. ಎಲ್ಲಾ ವಸ್ತುಗಳೂ ವಸ್ತ್ರಗಳಂತೆ ಹಳೆಯವಾಗುವವು.
>
> 12 ನೀನು ಅವುಗಳನ್ನು ಮೇಲಂಗಿಯಂತೆ ಮಡಿಚಿಡುವೆ. ಅವು ವಸ್ತ್ರಗಳಂತೆ ಬದಲಾಗುತ್ತವೆ. ಆದರೆ ನೀನು ಎಂದೆಂದಿಗೂ ಬದಲಾಗುವುದಿಲ್ಲ. ನಿನ್ನ ಜೀವಕ್ಕೆ ಅಂತ್ಯವೆಂಬುದಿಲ್ಲ.
>
> *ಕೀರ್ತನೆ 102:25-27*

[13]ದೇವರು ಯಾವ ದೂತನಿಗೂ ಇದನ್ನೆಂದೂ ಹೇಳಿಲ್ಲ:

> ‘‘ನಾನು ನಿನ್ನ ಶತ್ರುಗಳನ್ನು ನಿನಗೆ ಪಾದಪೀಠವನ್ನಾಗಿ ಮಾಡುವ ತನಕ, ನೀನು ನನ್ನ ಬಲಗಡೆಯಲ್ಲಿ ಕುಳಿತುಕೊ.’’ *ಕೀರ್ತನೆ 110:1*

[14]ದೇವದೂತರೆಲ್ಲರೂ ದೇವರ ಸೇವೆ ಮಾಡುವ ಆತ್ಮ
ಗಳಾಗಿದ್ದಾರೆ ಮತ್ತು ರಕ್ಷಣೆಯನ್ನು ಹೊಂದಿಕೊಳ್ಳುವ ಜನರ
ಸಹಾಯಕ್ಕಾಗಿ ಕಳುಹಿಸಲ್ಪಟ್ಟವರಾಗಿದ್ದಾರೆ.

**ನಮ್ಮ ರಕ್ಷಣೆಯು ಧರ್ಮಶಾಸ್ತ್ರಕಿಂತ ಉತ್ತಮವಾದುದು**

2 ಆದುದರಿಂದ ನಮಗೆ ಬೋಧಿಸಲ್ಪಟ್ಟ ಸಂಗತಿಗಳನ್ನು
ಬಹಳ ಎಚ್ಚರಿಕೆಯಿಂದ ಅನುಸರಿಸಬೇಕು. ಸತ್ಯಮಾರ್ಗ
ವನ್ನು ಬಿಟ್ಟು ತಪ್ಪಿಹೋಗದಂತೆ ಎಚ್ಚರಿಕೆಯಿಂದಿರಬೇಕು.
[2]ದೇವರು ತನ್ನ ದೂತರ ಮೂಲಕ ಕೊಟ್ಟ ವಾಕ್ಯವು ನಿಜವಾದ

ದ್ದೆಂದು ತೋರಿಸಲ್ಪಟ್ಟಿದೆ. ಯೆಹೂದ್ಯರು ಈ ವಾಕ್ಯಕ್ಕೆ ವಿರುದ್ಧ
ವಾಗಿ ತಪ್ಪು ಮಾಡಿದಾಗಲೆಲ್ಲಾ ಮತ್ತು ಅವಿಧೇಯ
ರಾದಾಗಲೆಲ್ಲಾ ತಕ್ಕ ದಂಡನೆ ಹೊಂದುತ್ತಿದ್ದರು. 3ನಮಗೆ
ದಯಪಾಲಿಸಲ್ಪಟ್ಟ ಈ ವಿಶೇಷ ರಕ್ಷಣೆಯನ್ನು ನಾವು ಅಲಕ್ಷ
ಮಾಡಿದರೆ ದಂಡನೆಯಂತೂ ಖಂಡಿತ. ಇದು ಪ್ರಭುವಿನಿಂದ
ಮೊದಲು ಹೇಳಲ್ಪಟ್ಟಿತು. ಆತನಿಂದ ಕೇಳಿದವರೇ ಈ ರಕ್ಷಣೆಯ
ಕುರಿತಾಗಿ ನಮಗೆ ಸ್ಥಿರಪಡಿಸಿದರು. 4ಇದಲ್ಲದೆ ದೇವರು ಅದ್ಭುತ
ಕಾರ್ಯಗಳಿಂದ, ಸೂಚಕಕಾರ್ಯಗಳಿಂದ, ನಾನಾ ವಿಧವಾದ
ಮಹತ್ಕಾರ್ಯಗಳಿಂದ ಮತ್ತು ಪವಿತ್ರಾತ್ಮನ ವರಗಳನ್ನು ತನ್ನ
ಇಷ್ಟಾನುಸಾರವಾಗಿ ದಯಪಾಲಿಸುವುದರ ಮೂಲಕ ಅದನ್ನು
ಸ್ಥಿರಪಡಿಸಿದನು.

### ಜನರನ್ನು ರಕ್ಷಿಸಲು ಕ್ರಿಸ್ತನು ಜನರಂತೆಯೇ ಆದನು

5ಮುಂದೆ ಬರುವ ನೂತನ ಲೋಕವನ್ನು ಆಳಲು ದೇವರು
ದೇವದೂತರನ್ನು ಆರಿಸಲಿಲ್ಲ. ಈಗ ನಾವು ನಿಮಗೆ ಹೇಳು
ತ್ತಿರುವುದು ಆ ಲೋಕದ ಕುರಿತಾಗಿಯೇ. 6ಅದನ್ನು ಪವಿತ್ರ
ಗ್ರಂಥದಲ್ಲಿ ಬರೆಯಲಾಗಿದೆ:

> ‘‘ದೇವರೇ, ನೀನು ಮಾನವರನ್ನು ಏಕೆ ನೆನಪು
> ಮಾಡಿಕೊಳ್ಳಬೇಕು? ನೀನು ಮನುಷ್ಯನಿ
> ಗೋಸ್ಕರ ಏಕೆ ಚಿಂತಿಸಬೇಕು. ಅವನು ಅಷ್ಟೊಂದು
> ಮುಖ್ಯ ನಾದವನೇ?
> 7 ಕೇವಲ ಸ್ವಲ್ಪಕಾಲದವರೆಗೆ ನೀನು ಅವನನ್ನು
> ದೇವದೂತರಿಗಿಂತ ಸ್ವಲ್ಪವೇ ಕಡಿಮೆ ಮಾಡಿದೆ.
> ನೀನು ಅವನಿಗೆ ವೈಭವವನ್ನೂ ಗೌರವವನ್ನೂ
> ಕಿರೀಟವಾಗಿ ಇಟ್ಟಿರುವೆ.
> 8 ನೀನು ಎಲ್ಲವನ್ನು ಅವನಿಗೆ ಅಧೀನಗೊಳಿಸಿರುವೆ.
> *ಕೀರ್ತನೆ 8:4-6*

ದೇವರು ಎಲ್ಲವನ್ನೂ ಆತನಿಗೆ ಅಧೀನಗೊಳಿಸಿದ್ದರೆ, ಆತನು
ಆಳದೆ ಇರುವಂಥದ್ದು ಒಂದಾದರೂ ಇಲ್ಲ. ಆದರೆ ಸಮಸ್ತದ
ಮೇಲೆ ಆವನು ಆಳ್ವಿಕೆ ಮಾಡುತ್ತಿರುವುದು ನಮಗಿನ್ನೂ
ಕಾಣುತ್ತಿಲ್ಲ. 9ಕೇವಲ ಸ್ವಲ್ಪಕಾಲದವರೆಗೆ ಯೇಸುವು ದೇವ
ದೂತರಿಗಿಂತ ಸ್ವಲ್ಪವೇ ಕಡಿಮೆಯಾಗಿ ಮಾಡಲ್ಪಟ್ಟನು. ಆದರೆ
ನಾವೀಗ ವೈಭವ, ಗೌರವಗಳೆಂಬ ಕಿರೀಟ ಧರಿಸಿರುವ ಆತನನ್ನು
ನೋಡುತ್ತೇವೆ. ಏಕೆಂದರೆ ದೇವರ ಕೃಪೆಯ ನಿಮಿತ್ತ ಆತನು
ಎಲ್ಲರಿಗೋಸ್ಕರ ಸಂಕಟ ಅನುಭವಿಸಿ ಮರಣ ಹೊಂದಿದನು.
10ಸಮಸ್ತವನ್ನು ಸೃಷ್ಟಿಸಿದಾತನು ದೇವರೇ. ಸಮಸ್ತವು ಆತನ
ಮಹಿಮೆಗಾಗಿಯೇ ಸೃಷ್ಟಿಯಾಯಿತು. ದೇವರು ತನ್ನವರೇ ಆದ
ಅನೇಕ ಜನರನ್ನು ಹೊಂದಿಕೊಂಡು ಅವರೊಂದಿಗೆ ತನ್ನ
ಮಹಿಮೆಯನ್ನು ಹಂಚಿಕೊಳ್ಳಲು ಬಯಸಿದನು. ಆದ್ದರಿಂದ
ಆತನು ಅವರನ್ನು ರಕ್ಷಣೆಗೆ ನಡೆಸಲು ಪರಿಪೂರ್ಣನಾದ
ಒಬ್ಬಾತನನ್ನು ನಿರ್ಮಿಸಿದನು. ಆತನೇ ಯೇಸು. ದೇವರು
ಆತನನ್ನು ಬಾಧೆಗಳ ಮೂಲಕವೇ ಪರಿಪೂರ್ಣನಾದ
ರಕ್ಷಕನನ್ನಾಗಿ ಮಾಡಿದನು. 11ಜನರನ್ನು ಪರಿಶುದ್ಧರನ್ನಾಗಿ
ಮಾಡುವ ಯೇಸುವೂ ಮತ್ತು ಆತನಿಂದ ಪರಿಶುದ್ಧರಾಗುವ
ಜನರೂ ಒಂದೇ ಕುಟುಂಬಕ್ಕೆ ಸೇರಿದವರಾಗಿದ್ದಾರೆ. ಆದ್ದರಿಂದ
ಆ ಜನರನ್ನು ಸಹೋದರ ರೆಂದೂ ಸಹೋದರಿಯರೆಂದೂ
ಕರೆಯಲು ಆತನು (ಯೇಸು) ನಾಚಿಕೆಪಡುವುದಿಲ್ಲ.
12ಯೇಸು ಹೇಳುತ್ತಾನೆ:

> ‘‘ದೇವರೇ, ನಿನ್ನನ್ನು ಕುರಿತು ನನ್ನ ಸಹೋದರ
> ಸಹೋದರಿಯರಿಗೆ ತಿಳಿಸುತ್ತೇನೆ; ನಿನ್ನ ಜನರೆಲ್ಲರ
> ಮುಂದೆ ನಿನ್ನ ಸ್ತೋತ್ರಗೀತೆಗಳನ್ನು ಹಾಡುತ್ತೇನೆ.’’
> *ಕೀರ್ತನೆ 22:22*

13 ಆತನು ಮತ್ತೆ ಹೇಳುತ್ತಾನೆ:

> ‘‘ನಾನು ದೇವರಲ್ಲಿ ಭರವಸೆ ಇಡುತ್ತೇನೆ.’’
> *ಯೆಶಾಯ 8:17*

ಆತನು ಹೇಳುತ್ತಾನೆ:

> ‘‘ನಾನಿಲ್ಲಿದ್ದೇನೆ. ದೇವರು ನನಗೆ ದಯಪಾಲಿ
> ಸಿರುವ ಮಕ್ಕಳು ನನ್ನೊಂದಿಗಿದ್ದಾರೆ.’’
> *ಯೆಶಾಯ 8:18*

14ಆ ಮಕ್ಕಳು ಭೌತಿಕ ಶರೀರ ಹೊಂದಿದ್ದರು. ಆದುದರಿಂದ
ಯೇಸು ತಾನೇ ಅವರಂತಾದನು. ಆತನು ತನ್ನ ಸಾವಿನ ಮೂಲಕ
ಮರಣಾಧಿಕಾರಿಯನ್ನು ಅಂದರೆ ಸೈತಾನನ್ನು ನಾಶಗೊಳಿಸಿ,
15ಅವರನ್ನು ಬಿಡುಗಡೆಗೊಳಿಸಬೇಕೆಂದು, ಅವರಂತೆಯೇ ಆಗಿ,
ಮರಣ ಹೊಂದಿದನು. ಅವರು ಮರಣ ಭಯದಿಂದ,
ಜೀವಮಾನವೆಲ್ಲ ಗುಲಾಮರಂತೆ ಜೀವಿಸುತ್ತಿದ್ದರು. 16ಆತನು
ಸಹಾಯ ಮಾಡುವುದು ಅಬ್ರಹಾಮನ ಸಂತತಿಯವರಿಗೇ
ಹೊರತು ದೇವದೂತರಿಗಲ್ಲ. 17ಈ ಕಾರಣದಿಂದಲೇ ಆತನು
ಎಲ್ಲಾ ವಿಧದಲ್ಲಿಯೂ ತನ್ನ ಸಹೋದರ ಸಹೋದರಿಯರಿಗೆ
ಸಮಾನನಾಗಬೇಕಾಯಿತು. ದೇವರ ಸೇವೆಯಲ್ಲಿ ಆತನು
ಜನರಿಗೆ ಕರುಣೆಯುಳ್ಳವನೂ ನಂಬಿಗಸ್ತನೂ ಆದ ಪ್ರಧಾನ
ಯಾಜಕನಾದನು. ಹೀಗೆ ಆತನು ಜನರ ಪಾಪಗಳಿಗೆ ಕ್ಷಮೆ
ಯನ್ನು ತರಲು ಸಾಧ್ಯವಾಯಿತು. 18ತಾನೇ ಶೋಧಿಸಲ್ಪಟ್ಟು
ಸಂಕಟಕ್ಕೆ ಒಳಗಾದುದರಿಂದ, ಶೋಧಿಸಲ್ಪಡುವ ಜನರಿಗೆ
ಸಹಾಯ ಮಾಡಲು ಈಗ ಆತನು ಸಮರ್ಥನಾಗಿದ್ದಾನೆ.

### ಯೇಸು ಮೋಶೆಗಿಂತ ಶ್ರೇಷ್ಠನು

3 ಆದುದರಿಂದ ನೀವೆಲ್ಲರೂ ಯೇಸುವನ್ನು ಕುರಿತು
ಆಲೋಚಿಸಿರಿ. ದೇವರು ಆತನನ್ನು ನಮ್ಮ ಬಳಿಗೆ ಕಳುಹಿ
ಸಿದನು. ಆತನೇ ನಮ್ಮ ನಂಬಿಕೆಯ ಪ್ರಧಾನಯಾಜಕನು.
ಪರಿಶುದ್ಧರಾದ ಸಹೋದರ ಸಹೋದರಿಯರೇ, ನಾನು ನಿಮಗೆ
ಹೇಳುವುದೇನಂದರೆ, ನೀವು ದೇವರಿಂದ ಕರೆಯಲ್ಪಟ್ಟವ
ರಾಗಿದ್ದೀರಿ. 2ಯೇಸುವನ್ನು ದೇವರು ನಮ್ಮ ಬಳಿಗೆ ಕಳುಹಿಸಿ,
ಆತನನ್ನು ನಮ್ಮ ಪ್ರಧಾನಯಾಜಕನನ್ನಾಗಿ ಮಾಡಿದನು. ಆತನು
ಮೋಶೆಯಂತೆ ದೇವರಿಗೆ ನಂಬಿಗಸ್ತನಾಗಿದ್ದನು. ದೇವರ ಮನೆ
ಯಲ್ಲಿ ದೇವರ ಇಷ್ಟಕ್ಕನುಗುಣವಾಗಿ ಮಾಡಬೇಕಾದುದನ್ನೆಲ್ಲ
ಆತನು ಮಾಡಿದನು. 3ಒಬ್ಬ ಮನುಷ್ಯನು ಮನೆಯನ್ನು ಕಟ್ಟಿ
ದಾಗ, ಜನರು ಮನೆಗಿಂತಲೂ ಅವನಿಗೇ ಹೆಚ್ಚು ಮಾನ್ಯತೆಯನ್ನು
ಕೊಡುವಂತೆಯೇ ಯೇಸು ಮೋಶೆಗಿಂತ ಹೆಚ್ಚು ಮಾನ್ಯತೆಯನ್ನು

ಹೊಂದಿದ್ದಾನೆ. 4ಪ್ರತಿಯೊಂದು ಮನೆಯು ಯಾರಾದರೊಬ್ಬರಿಂದ ಕಟ್ಟಲ್ಪಟ್ಟಿರಬೇಕು. ಆದರೆ ದೇವರು ಎಲ್ಲವನ್ನು ನಿರ್ಮಿಸಿದನು. 5ದೇವರ ಮನೆಯಲ್ಲೆಲ್ಲಾ ಮೋಶೆಯು ಸೇವಕನಂತೆ ನಂಬಿಗಸ್ತನಾಗಿದ್ದನು. ಮುಂದೆ ಪ್ರಕಟವಾಗಲಿದ್ದ ಸಂಗತಿಗಳಿಗೆ ಅವನು ಸಾಕ್ಷಿಯಾಗಿದ್ದನು. 6ಕ್ರಿಸ್ತನಾದರೊ ಮಗನಾಗಿ ದೇವರ ಮನೆಯನ್ನು ಆಳುವುದರಲ್ಲಿ ನಂಬಿಗಸ್ತನಾಗಿದ್ದಾನೆ. ವಿಶ್ವಾಸಿಗಳಾದ ನಾವು ನಮಗಿರುವ ಮಹಾ ನಿರೀಕ್ಷೆಯಲ್ಲಿ ದೃಢವಾಗಿಯೂ ಹೆಮ್ಮೆಯಿಂದಲೂ ಇರುವುದಾಗಿದ್ದರೆ ದೇವರ ಮನೆಯವರಾಗಿದ್ದೇವೆ.

### ನಾವು ದೇವರನ್ನು ಅನುಸರಿಸಲೇಬೇಕು

7ಆದುದರಿಂದ ಪವಿತ್ರಾತ್ಮನು ಹೇಳುವ ಪ್ರಕಾರ,

‘‘ನೀವು ಈ ಹೊತ್ತು ದೇವರ ಸ್ವರ ಕೇಳಿದರೆ,
8 ಪೂರ್ವಕಾಲದಲ್ಲಿ ನಿಮ್ಮ ಹಿರಿಯರು ದೇವರಿಗೆ ವಿರುದ್ಧವಾಗಿದ್ದಂತೆ ಕಠಿಣರಾಗಿರಬೇಡಿ. ಅಂದು ಅವರು ಮರುಭೂಮಿಯಲ್ಲಿ ದೇವರನ್ನು ಪರೀಕ್ಷಿಸಿದರು.
9 ನಾನು ಮರಳುಗಾಡಿನಲ್ಲಿ ನಲವತ್ತು ವರ್ಷಗಳ ಕಾಲ ಮಾಡಿದ್ದನ್ನು ನಿಮ್ಮ ಪೂರ್ವಿಕರು ನೋಡಿದರೂ ನನ್ನನ್ನೂ ನನ್ನ ತಾಳ್ಮೆಯನ್ನೂ ಪರೀಕ್ಷಿಸಿದರು.
10 ಆದ್ದರಿಂದ ಅವರ ಮೇಲೆ ನಾನು ಕೋಪಗೊಂಡಿದ್ದೆನು. ‘ಅವರ ಆಲೋಚನೆಗಳು ಯಾವಾಗಲೂ ತಪ್ಪಾಗಿವೆ. ನನ್ನ ಮಾರ್ಗವನ್ನು ಅವರು ಅರ್ಥಮಾಡಿಕೊಳ್ಳಲೇ ಇಲ್ಲ’ ಎಂದು ನಾನು ಹೇಳಿದೆನು.
11 ‘ಆ ಜನರು ನನ್ನ ವಿಶ್ರಾಂತಿಯಲ್ಲಿ ಪ್ರವೇಶಿಸುವುದಿಲ್ಲ’ ಎಂದು ನಾನು ಕೋಪಗೊಂಡು ಪ್ರಮಾಣ ಮಾಡಿದೆನು.’’

*ಕೀರ್ತನೆ 95:7-11*

12ಆದ್ದರಿಂದ ಸಹೋದರ ಸಹೋದರಿಯರೇ, ನಿಮ್ಮಲ್ಲಿ ಯಾರೂ ಕೆಟ್ಟಬುದ್ಧಿಯುಳ್ಳವರಾಗದಂತೆ ನಂಬದವರಾಗದಂತೆ, ಜೀವಸ್ವರೂಪನಾದ ದೇವರನ್ನು ತೊರೆಯದಂತೆ ಎಚ್ಚರಿಕೆಯಿಂದಿರಿ. 13ಆದರೆ ಒಬ್ಬರನ್ನೊಬ್ಬರು ಪ್ರತಿದಿನವೂ ಸಂತೈಸಿರಿ. ‘‘ಈ ದಿನ’’ವು ಇನ್ನೂ ಇರುವಾಗಲೇ ಇದನ್ನೆಲ್ಲ ಮಾಡಿರಿ. ಪಾಪದಿಂದಾಗಲಿ ಪಾಪವು ಮೋಸಗೊಳಿಸುವ ರೀತಿಯಿಂದಾಗಲಿ ನಿಮ್ಮಲ್ಲಿ ಯಾರೂ ಕಠಿಣರಾಗದಂತೆ ಒಬ್ಬರಿಗೊಬ್ಬರು ಸಹಾಯ ಮಾಡಿರಿ. 14ನಾವೆಲ್ಲರೂ ಒಟ್ಟಾಗಿ ಕ್ರಿಸ್ತನಲ್ಲಿ ಪಾಲುಗಾರರಾಗಿದ್ದೇವೆ. ಆರಂಭದಲ್ಲಿ ನಮಗಿದ್ದ ದೃಢನಂಬಿಕೆಯನ್ನು ಅಂತ್ಯದವರೆಗೂ ಬಲವಾಗಿ ಹಿಡಿದುಕೊಳ್ಳುವುದಾದರೆ ಇದು ನಿಜವಾಗುತ್ತದೆ. 15ಪವಿತ್ರ ಗ್ರಂಥವು ಹೇಳುವುದೇನಂದರೆ:

‘‘ನೀವು ಈ ಹೊತ್ತು ದೇವರ ಸ್ವರ ಕೇಳಿದರೆ, ಪೂರ್ವಕಾಲದಲ್ಲಿ ನಿಮ್ಮ ಹಿರಿಯರು ವಿರುದ್ಧವಾಗಿದ್ದಂತೆ ಕಠಿಣರಾಗಬೇಡಿ.’’

*ಕೀರ್ತನೆ 95:7-8*

16ದೇವರ ಸ್ವರವನ್ನು ಕೇಳಿಯೂ ಆತನಿಗೆ ವಿರುದ್ಧರಾದವರು ಯಾರು? ಮೋಶೆಯ ಮೂಲಕ ಈಜಿಪ್ಟಿನಿಂದ ಬಿಡುಗಡೆ ಹೊಂದಿದವರಲ್ಲವೇ? 17ನಲವತ್ತು ವರ್ಷಗಳ ಕಾಲ ದೇವರು ಯಾರ ಮೇಲೆ ಕೋಪಗೊಂಡಿದ್ದನು? ಪಾಪವನ್ನು ಮಾಡಿದವರ ಮೇಲಲ್ಲವೇ? ಅವರೆಲ್ಲರೂ ಮರುಭೂಮಿಯಲ್ಲಿ ಸತ್ತು ಹೋದರು. 18ತನ್ನ ವಿಶ್ರಾಂತಿಯಲ್ಲಿ ಅವರು ಸೇರುವುದೇ ಇಲ್ಲವೆಂದು ದೇವರು ಪ್ರಮಾಣ ಮಾಡಿದಾಗ, ಆತನು ಯಾರೊಡನೆ ಮಾತಾಡುತ್ತಿದ್ದನು? ತನಗೆ ಅವಿಧೇಯರಾದ ಜನರ ಬಗ್ಗೆ ಅಲ್ಲವೇ?

19ಆದುದರಿಂದ ದೇವರ ವಿಶ್ರಾಂತಿಯಲ್ಲಿ ಪ್ರವೇಶಿಸಲು ಆ ಜನರಿಗೆ ಅವಕಾಶ ದೊರೆಯಲಿಲ್ಲ. ಅವರಲ್ಲಿ ನಂಬಿಕೆ ಇಲ್ಲದಿದ್ದ ಕಾರಣವೇ ಅವರು ಪ್ರವೇಶಿಸಲಿಲ್ಲ.

4 ದೇವರು ಆ ಜನರಿಗೆ ನೀಡಿದ ವಾಗ್ದಾನವು ನಮ್ಮಲ್ಲಿ ಇನ್ನೂ ಇದೆ. ನಾವು ದೇವರ ವಿಶ್ರಾಂತಿಯಲ್ಲಿ ಪ್ರವೇಶಿಸಬಹುದೆಂಬುದೇ ಆ ವಾಗ್ದಾನ. ಆದುದರಿಂದ ನಮ್ಮಲ್ಲಿ ಯಾರೂ ಆ ವಾಗ್ದಾನದ ಫಲವನ್ನು ಪಡೆಯುವದರಲ್ಲಿ ವಿಫಲರಾಗದಂತೆ ಬಹು ಎಚ್ಚರಿಕೆಯಿಂದಿರೋಣ. 2ರಕ್ಷಣಾಮಾರ್ಗದ ಕುರಿತು ಅವರಿಗೆ ತಿಳಿಸಲ್ಪಟ್ಟಂತೆಯೇ ನಮಗೂ ತಿಳಿಸಲಾಯಿತು. ಅವರು ಆ ಬೋಧನೆಯನ್ನು ಕೇಳಿದರೂ ಅವರಿಗೆ ಪ್ರಯೋಜನವಾಗಲಿಲ್ಲ. ಏಕೆಂದರೆ ಅವರು ಅದನ್ನು ನಂಬಿಕೆಯಿಂದ ಸ್ವೀಕರಿಸಿಕೊಳ್ಳಲಿಲ್ಲ. 3ನಂಬುವವರಾದ ನಾವು ದೇವರ ವಿಶ್ರಾಂತಿಯಲ್ಲಿ ಸೇರಲು ಸಮರ್ಥರಾಗಿದ್ದೇವೆ. ದೇವರು ಹೇಳಿದಂತೆ:

‘‘ಆ ಜನರು ನನ್ನ ವಿಶ್ರಾಂತಿಯಲ್ಲಿ ಎಂದಿಗೂ ಪ್ರವೇಶಿಸುವುದಿಲ್ಲವೆಂದು ನಾನು ಕೋಪಗೊಂಡು ಪ್ರಮಾಣ ಮಾಡಿದೆನು.’’

*ಕೀರ್ತನೆ 95:11*

ಈ ಲೋಕವನ್ನು ಸೃಷ್ಟಿಸಿದ ನಂತರ ತನ್ನ ಕಾರ್ಯಗಳು ಮುಗಿದು ಹೋಗಿದ್ದರೂ ದೇವರು ಹೀಗೆ ಹೇಳಿದನು. 4ಪವಿತ್ರ ಗ್ರಂಥದ ಒಂದು ಭಾಗದಲ್ಲಿ ಆತನು ವಾರದ ಏಳನೆಯ ದಿನದ ಬಗ್ಗೆ ಹೀಗೆ ಮಾತಾಡಿದ್ದಾನೆ: ‘‘ಆದುದರಿಂದ ದೇವರು ತನ್ನ ಕಾರ್ಯಗಳನ್ನೆಲ್ಲ ಮುಗಿಸಿ ಏಳನೆಯ ದಿನ ವಿಶ್ರಾಂತಿ ಹೊಂದಿದನು.’’ * 5ಪವಿತ್ರ ಗ್ರಂಥದ ಇನ್ನೊಂದು ಭಾಗದಲ್ಲಿ ಆತನು, ‘‘ಆ ಜನರು ನನ್ನ ವಿಶ್ರಾಂತಿಯಲ್ಲಿ ಎಂದಿಗೂ ಪ್ರವೇಶಿಸುವುದಿಲ್ಲ’’ * ವೆಂದೂ ಹೇಳಿದ್ದಾನೆ.

6ಆದ್ದರಿಂದ ಕೆಲವರು ದೇವರ ವಿಶ್ರಾಂತಿಯಲ್ಲಿ ಸೇರುತ್ತಾರೆಂಬುದು ಇನ್ನೂ ಖಚಿತವಾಗಿದೆ. ಆದರೆ ರಕ್ಷಣಾಮಾರ್ಗವನ್ನು ಮೊದಲು ಕೇಳಿದ ಜನರು ಪ್ರವೇಶಿಸಲಿಲ್ಲ. ಅವರು ವಿಧೇಯರಾಗದೆ ಇದ್ದುದರಿಂದ ಅವರು ಸೇರಲಿಲ್ಲ. 7ಆದುದರಿಂದ ಆತನು ಮತ್ತೊಂದು ವಿಶೇಷ ದಿನವನ್ನು ಯೋಜಿಸಿದನು. ಅದನ್ನು ‘‘ಈ ಹೊತ್ತು’’ ಎಂದು ಕರೆಯಲಾಗಿದೆ. ಆತನು ಆ ದಿನವನ್ನು ಕುರಿತು ಬಹುಕಾಲದ ನಂತರ ದಾವೀದನ ಮೂಲಕ ತಿಳಿಸಿದನು. ಪವಿತ್ರ ಗ್ರಂಥದ ಈ ಭಾಗವನ್ನು ನಾವು ಮೊದಲೊಮ್ಮೆ ನೋಡಿದೆವು:

---

**ಆದುದರಿಂದ … ಹೊಂದಿದನು** ಆದಿಕಾಂಡ 2:2.

**ಆ ಜನರು … ಪ್ರವೇಶಿಸುವುದಿಲ್ಲ** ಕೀರ್ತನೆ 95:11.

‘‘ನೀವು ಈ ಹೊತ್ತು ದೇವರ ಸ್ವರವನ್ನು ಕೇಳಿದರೆ,
ನಿಮ್ಮ ಹೃದಯಗಳನ್ನು ಕಠಿಣ ಮಾಡಿಕೊಳ್ಳ
ಬೇಡಿ.’’ *ಕೀರ್ತನೆ 95:7-8*

8ದೇವರು ವಾಗ್ದಾನಮಾಡಿದ್ದ ವಿಶ್ರಾಂತಿಗೆ ಯೆಹೋಶುವನು
ಜನರನ್ನು ಕರೆದೊಯ್ದಿದ್ದರೆ ವಿಶ್ರಾಂತಿಯ ಮತ್ತೊಂದು ದಿನದ
ಕುರಿತು ಹೇಳುತ್ತಿರಲಿಲ್ಲ. 9ದೇವಜನರಿಗೋಸ್ಕರವಿರುವ
ಸಬ್ಬತ್ತಿಂಬ ವಿಶ್ರಾಂತಿಯು ಇನ್ನೂ ಬರಲಿದೆ ಎಂಬುದನ್ನು ಇದು
ತೋರ್ಪಡಿಸುತ್ತದೆ. 10ಆತನು ತನ್ನ ಕಾರ್ಯವನ್ನು ಮುಗಿಸಿದ
ನಂತರ ವಿಶ್ರಾಂತಿ ಹೊಂದಿದನು. ಆದುದರಿಂದ ದೇವರ
ವಿಶ್ರಾಂತಿಗೆ ಪ್ರವೇಶಿಸುವವನು ಆತನು ಮಾಡಿದಂತೆ ತನ್ನ
ಕಾರ್ಯವನ್ನು ಮುಗಿಸಿದವನಾಗಿರಬೇಕು. 11ದೇವರ
ವಿಶ್ರಾಂತಿಗೆ ಪ್ರವೇಶಿಸಲು ನಮ್ಮಿಂದಾದಷ್ಟು ಪ್ರಯತ್ನಿಸೋಣ.
ಆತನಿಗೆ ಅವಿಧೇಯರಾದ ಆ ಜನರನ್ನು ಅನುಸರಿಸಿ ನಮ್ಮಲ್ಲಿ
ಯಾರೂ ವಿಫಲರಾಗದಂತೆ ನೋಡಿಕೊಳ್ಳೋಣ.
12ದೇವರ ವಾಕ್ಯವು ಸಜೀವವಾದದ್ದು ಕಾರ್ಯ ಸಾಧಕ
ವಾದದ್ದು. ಅದು ಅತ್ಯಂತ ಹರಿತವಾದ ಖಡ್ಗಕ್ಕಿಂತಲೂ ಹರಿತ
ವಾಗಿದ್ದು ನಾಟಿಕೊಳ್ಳುತ್ತದೆ, ಆತ್ಮ ಪ್ರಾಣಗಳನ್ನೂ ಕೀಲು ಮಜ್ಜೆ
ಗಳನ್ನು ವಿಭಾಗಿಸುತ್ತದೆ; ನಮ್ಮ ಹೃದಯದ ಉದ್ದೇಶಗಳನ್ನು
ಮತ್ತು ಆಲೋಚನೆಗಳನ್ನು ವಿವೇಚಿಸುತ್ತದೆ. 13ದೇವರ ದೃಷ್ಟಿಗೆ
ಯಾವುದೂ ಮುಚ್ಚುಮರೆಯಾಗಿಲ್ಲ. ಆತನ ಕಣ್ಣೆದುರಿನಲ್ಲಿ
ಪ್ರತಿಯೊಂದೂ ತೆರೆಯಲ್ಪಟ್ಟು ಬಟ್ಟಬಯಲಾಗಿವೆ. ನಾವು ನಮ್ಮ
ಜೀವಿತದ ಬಗ್ಗೆ ಲೆಕ್ಕ ಒಪ್ಪಿಸಬೇಕಾಗಿರುವುದು ಆತನಿಗೇ.

### ದೇವರ ಸನ್ನಿಧಿಗೆ ಬರಲು ಯೇಸು ನಮಗೆ ಸಹಾಯ ಮಾಡುತ್ತಾನೆ

14ಪರಲೋಕಕ್ಕೆ ಏರಿಹೋದ ಪ್ರಧಾನ ಯಾಜಕನೊಬ್ಬನು
ನಮಗಿದ್ದಾನೆ. ಆತನೇ ದೇವರ ಮಗನಾದ ಯೇಸು. ಆದು
ದರಿಂದ ನಮಗಿರುವ ನಂಬಿಕೆಯಲ್ಲೇ ದೃಢವಾಗಿ ಸಾಗೋಣ.
15ನಮ್ಮ ಪ್ರಧಾನ ಯಾಜಕನಾಗಿರುವ ಯೇಸು ನಮ್ಮ
ದೌರ್ಬಲ್ಯವನ್ನು ಅರ್ಥಮಾಡಿಕೊಳ್ಳಲು ಸಮರ್ಥನಾಗಿದ್ದಾನೆ.
ಆತನು ಈ ಲೋಕದಲ್ಲಿ ಜೀವಿಸಿದ್ದಾಗ, ಸರ್ವ ವಿಷಯಗಳಲ್ಲಿ
ನಮ್ಮಂತೆಯೇ ಶೋಧನೆಗೆ ಗುರಿಯಾದರೂ ಪಾಪಮಾಡಲಿಲ್ಲ.
16ಆದುದರಿಂದ ದೇವರ ಕೃಪಾಸಿಂಹಾಸನದ ಬಳಿಗೆ ಸಂಕೋಚ
ಪಡದೆ ಬರೋಣ. ಕೊರತೆಯಲ್ಲಿರುವಾಗ ನಮಗೆ ಬೇಕಾದ
ಸಹಾಯಕ್ಕಾಗಿ ಕೃಪೆಯನ್ನೂ ಕರುಣೆಯನ್ನೂ ಅಲ್ಲಿ ಹೊಂದಿ
ಕೊಳ್ಳುವೆವು.

5 ಪ್ರತಿಯೊಬ್ಬ ಯೆಹೂದ್ಯ ಪ್ರಧಾನಯಾಜಕನೂ ಮನುಷ್ಯ
ರೊಳಗಿಂದ ಆರಿಸಲ್ಪಟ್ಟು ದೇವರಿಗೆ ಸಂಬಂಧಿಸಿದ
ಕಾರ್ಯಗಳನ್ನು ಮನುಷ್ಯರಿಗೋಸ್ಕರ ಮಾಡಲು ನೇಮಿಸಲ್ಪ
ಡುತ್ತಾನೆ. ಆ ಯಾಜಕನು ಪಾಪಗಳಿಗಾಗಿ ದೇವರಿಗೆ ಕಾಣಿಕೆ
ಗಳನ್ನೂ ಯಜ್ಞಗಳನ್ನೂ ಅರ್ಪಿಸಬೇಕು. 2ಅವನು ಜನರೆಲ್ಲ
ರಂತೆ ದುರ್ಬಲನಾಗಿರುವುದರಿಂದ ಅರ್ಥಮಾಡಿಕೊಳ್ಳದ
ಮತ್ತು ದಾರಿತಪ್ಪಿದ ಜನರ ವಿಷಯದಲ್ಲಿ ತಾಳ್ಮೆಯಿಂದ ಸಹಿಸಿ
ಕೊಳ್ಳಲು ಶಕ್ತನಾಗಿದ್ದಾನೆ. 3ತಾನೂ ಬಲಹೀನನಾಗಿರು
ವುದರಿಂದ ಅವನು ಮನುಷ್ಯರ ಪಾಪಗಳಿಗಾಗಿಯೂ ತನ್ನ ಸ್ವಂತ
ಪಾಪಗಳಿಗಾಗಿಯೂ ಯಜ್ಞಗಳನ್ನು ಅರ್ಪಿಸುತ್ತಾನೆ.

4ಪ್ರಧಾನಯಾಜಕನಾಗಿ ನೇಮಿಸಲ್ಪಡುವುದು ಒಂದು
ಗೌರವ. ಆದರೆ ಯಾರೂ ತಮಗೆ ತಾವೇ ಈ ಕಾರ್ಯಕ್ಕೆ
ಆರಿಸಲ್ಪಡುವುದಿಲ್ಲ. ದೇವರು ಆರೋನನನ್ನು ಕರೆದಂತೆ, ಆ
ವ್ಯಕ್ತಿಯನ್ನು ಕರೆಯಬೇಕು. 5ಕ್ರಿಸ್ತನೂ ಇದೇ ರೀತಿ ನೇಮಿಸ
ಲ್ಪಟ್ಟನು. ಆತನು ಪ್ರಭಾವದ ಪ್ರಧಾನಯಾಜಕನಾಗಿ ತನ್ನನ್ನು
ತಾನೇ ಆರಿಸಿಕೊಳ್ಳಲಿಲ್ಲ. ಆದರೆ ದೇವರು ಆತನನ್ನು ಆರಿಸಿದನು.
ದೇವರು ಕ್ರಿಸ್ತನಿಗೆ ಹೀಗೆ ಹೇಳಿದನು:

‘‘ನೀನು ನನ್ನ ಮಗನು. ಈ ದಿನ ನಾನು ನಿನ್ನ
ತಂದೆಯಾದೆನು.’’
*ಕೀರ್ತನೆ 2:7*

6ಪವಿತ್ರ ಗ್ರಂಥದ ಮತ್ತೊಂದು ಕಡೆಯಲ್ಲಿ ದೇವರು ಇಂತೆನ್ನು
ತ್ತಾನೆ:

‘‘ನೀನು ಮೆಲ್ಕಿಜೆದೇಕನಂತೆ ಸದಾಕಾಲವೂ
ಪ್ರಧಾನಯಾಜಕನಾಗಿರುವೆ.’’
*ಕೀರ್ತನೆ 110:4*

7ಕ್ರಿಸ್ತನು ಭೂಲೋಕದಲ್ಲಿ ಜೀವಿಸಿದ್ದಾಗ, ದೇವರಲ್ಲಿ
ಪ್ರಾರ್ಥಿಸಿ, ಸಹಾಯವನ್ನು ಬೇಡಿದನು. ಆತನನ್ನು ಸಾವಿನಿಂದ
ರಕ್ಷಿಸುವ ಶಕ್ತಿ ದೇವರೊಬ್ಬನಿಗೇ ಇತ್ತು. ಆದ್ದರಿಂದ ಆತನು
ಗಟ್ಟಿಯಾಗಿ ರೋದಿಸುತ್ತಾ ಕಣ್ಣೀರು ಸುರಿಸುತ್ತಾ ದೇವರಲ್ಲಿ
ಪ್ರಾರ್ಥಿಸಿದನು. ದೇವರ ಇಷ್ಟದಂತೆ ಆತನು ಎಲ್ಲವನ್ನೂ
ಮಾಡಿದವನಾಗಿದ್ದನು ಮತ್ತು ದೀನಭಾವವನ್ನು ಹೊಂದಿದ್ದನು.
ಆದ್ದರಿಂದ ದೇವರು ಆತನ ಪ್ರಾರ್ಥನೆಗಳಿಗೆ ಉತ್ತರಿಸಿದನು.
8ಆತನು ದೇವರ ಮಗನಾಗಿದ್ದಾನೆ. ಆದರೂ ಹಿಂಸೆಗೊಳಗಾಗಿ,
ತಾನು ಅನುಭವಿಸಿದ ಹಿಂಸೆಗಳಿಂದಲೇ ವಿಧೇಯನಾಗಿರು
ವುದನ್ನು ಕಲಿತುಕೊಂಡನು. 9ಹೀಗಿರಲಾಗಿ ಆತನು ಪರಿಶುದ್ಧ
ನಾಗಿದ್ದನು. ದೇವರಿಗೆ ವಿಧೇಯರಾಗುವ ಜನರೆಲ್ಲರೂ ಶಾಶ್ವತ
ವಾದ ರಕ್ಷಣೆಯನ್ನು ಹೊಂದಿಕೊಳ್ಳಲು ಆತನೇ ಕಾರಣ.
10ದೇವರು ಆತನನ್ನು ಮೆಲ್ಕಿಜೆದೇಕನಂತೆ ಪ್ರಧಾನ ಯಾಜಕ
ನನ್ನಾಗಿ ಮಾಡಿದನು.

### ಶೋಧನೆಗೆ ಸೋತು ಹೋಗದಿರಲು ಎಚ್ಚರಿಕೆ

11ಈ ವಿಷಯದಲ್ಲಿ ನಾವು ನಿಮಗೆ ಹೇಳಬೇಕಾದ ಅನೇಕ
ಸಂಗತಿಗಳಿವೆ. ಆದರೆ ನೀವು ಇದನ್ನು ಅರ್ಥಮಾಡಿಕೊಳ್ಳಲು
ಪ್ರಯತ್ನಿಸದಿರುವುದರಿಂದ ವಿವರಿಸುವುದು ಕಷ್ಟಕರವಾಗಿದೆ.
12ನಿಮಗೆ ಕಾಲವು ಬೇಕಾದಷ್ಟಿದ್ದುದರಿಂದ ಈಗಾಗಲೇ ನೀವು
ಉಪದೇಶಕರಾಗಿರಬೇಕಿತ್ತು. (ಆದರೆ ನೀವಿನ್ನೂ ಆಗಿಲ್ಲ.)
ಹೀಗಿರಲು ದೇವರ ಉಪದೇಶಗಳನ್ನು ಮೊದಲ ಪಾಠದಿಂದ
ಮತ್ತೆ ಉಪದೇಶಿಸಲು ನಿಮಗೆ ಮತ್ತೊಬ್ಬ ವ್ಯಕ್ತಿಯ ಅಗತ್ಯವಿದೆ.
ಹಾಲಿನಂತಿರುವ ಉಪದೇಶವನ್ನು ನಾವು ನಿಮಗೆ ಮಾಡ
ಬೇಕಾಗಿದೆ. ನೀವು ಗಟ್ಟಿಆಹಾರವನ್ನು ತಿನ್ನುವವರಾಗಿಲ್ಲ.
13ನೀವು ಹಾಲು ಕುಡಿಯುವ ಮಕ್ಕಳಂತಿರುವಿರಿ. ನಿಮಗೆ
ಯೋಗ್ಯ ಬೋಧನೆಗಳ ಬಗ್ಗೆ ಏನೂ ತಿಳಿದಿಲ್ಲ. 14ಆದರೆ ಗಟ್ಟಿ
ಯಾದ ಆಹಾರವು ಜ್ಞಾನದಲ್ಲಿ ಬೆಳವಣಿಗೆ ಹೊಂದಿರುವವರಿಗೇ
ಹೊರತು ಮಕ್ಕಳಿಗಲ್ಲ. ಇವರು ಅನುಭವದಿಂದ ತಮ್ಮ ಮನಸ್ಸು

ಗಳನ್ನು ಹಿಡಿತದಲ್ಲಿ ಇಟ್ಟುಕೊಂಡಿರುವುದರಿಂದ ಒಳಿತು ಕೆಡುಕು
ಗಳಿಗಿರುವ ಬೇದವನ್ನು ತಿಳಿದುಕೊಳ್ಳಬಲ್ಲವರಾಗಿದ್ದಾರೆ.

6 ಆದುದರಿಂದ ಕ್ರಿಸ್ತನನ್ನು ಕುರಿತ ಆರಂಭದ ಪಾಠಗಳನ್ನು
ನಾವು ಮುಗಿಸಿದವರಾಗಿರಬೇಕು. ನಾವು ಆರಂಭಿಸಿದ
ಪಾಠಗಳಿಗೆ ಮತ್ತೆ ಹೋಗಬಾರದು. ನಮ್ಮ ಮೊದಲಿನ ದುಷ್ಟ
ಕಾರ್ಯಗಳನ್ನು ತೊರೆದುಬಿಟ್ಟು ದೇವರಲ್ಲಿ ನಂಬಿಕೆಯನ್ನಿಟ್ಟು
ಕ್ರಿಸ್ತನಲ್ಲಿ ನಮ್ಮ ಜೀವನವನ್ನು ಪ್ರಾರಂಭಿಸಿದೆವು. [2]ಆ ಸಮಯ
ದಲ್ಲಿ ನಮಗೆ ದೀಕ್ಷಾಸ್ನಾನ ಹಸ್ತಾರ್ಪಣದ ವಿಷಯದ ಉಪದೇಶ,
ಸತ್ತವರ ಪುನರುತ್ಥಾನ ಮತ್ತು ನಿತ್ಯವಾದ ನ್ಯಾಯತೀರ್ಪು
ಇವುಗಳನ್ನು ಕುರಿತು ಬೋಧಿಸಲಾಯಿತು. ಆದರೆ ಈಗ ನಾವು
ಪೂರ್ಣತಿಳಿವಳಿಕೆಗೆ ಹೋಗುವುದು ಅಗತ್ಯವಾಗಿದೆ. [3]ದೇವರ
ಚಿತ್ತವಾದರೆ ಹೀಗೆ ಮುಂದಕ್ಕೆ ಸಾಗುತ್ತಾ ಹೋಗುವೆವು.

[4-6]ಕ್ರಿಸ್ತನ ಮಾರ್ಗವನ್ನು ಜನರು ಬಿಟ್ಟುಹೋದ ನಂತರ,
ನೀವು ಅವರ ಜೀವನವನ್ನು ಮತ್ತೆ ಪರಿವರ್ತಿಸಲು ಸಾಧ್ಯವೇ?
ನಾನು ಸತ್ಯವನ್ನು ತಿಳಿದುಕೊಂಡ ಜನರನ್ನು ಕುರಿತು ಮಾತಾಡು
ತ್ತಿದ್ದೇನೆ. ಅವರು ದೇವರ ವರಗಳನ್ನು ಪಡೆದವರೂ ಪವಿತ್ರಾತ್ಮ
ನಲ್ಲಿ ಪಾಲುಗಾರರೂ ಆಗಿದ್ದಾರೆ. ಅವರು ದೇವರು ಹೇಳಿದ
ಸಂಗತಿಗಳನ್ನು ಕೇಳಿದವರೂ ದೇವರ ಹೊಸ ಲೋಕದ
ಮಹಾಶಕ್ತಿಗಳನ್ನು ನೋಡಿದವರೂ ಆಗಿದ್ದಾರೆ. ಅವುಗಳೆಲ್ಲ
ಉತ್ತಮವಾದುವುಗಳೆಂಬುದನ್ನು ಅವರು ಕಲಿತುಕೊಂಡಿದ್ದಾರೆ.
ಆದರೂ ಅವರು ಕ್ರಿಸ್ತನ ಮಾರ್ಗವನ್ನು ಬಿಟ್ಟುಹೋದರು.
ಅವರ ಜೀವಿತವನ್ನು ಮತ್ತೆ ಪರಿವರ್ತಿಸಿ ಕ್ರಿಸ್ತನ ಬಳಿಗೆ ಬರಲು
ಸಾಧ್ಯವಿಲ್ಲ. ಏಕೆಂದರೆ ಕ್ರಿಸ್ತನನ್ನು ಬಿಟ್ಟುಹೋದ ಅವರು ಕ್ರಿಸ್ತ
ನನ್ನು ಮತ್ತೆ ಶಿಲುಬೆಗೇರಿಸಿ ಮೊಳೆಗಳನ್ನು ಹೊಡೆಯುವವರೂ
ಜನರೆಲ್ಲರ ಮುಂದೆ ಕ್ರಿಸ್ತನಿಗೆ ಅವಮಾನ ಮಾಡುವವರೂ
ಆಗಿದ್ದಾರೆ.

[7]ಆ ಜನರು ತನ್ನ ಮೇಲೆ ಪದೇ ಪದೇ ಸುರಿಯುವ ಮಳೆಯನ್ನು
ಹೀರಿಕೊಳ್ಳುವ ಭೂಮಿಯಂತಿದ್ದಾರೆ. ಅದು ಜನರಿಗೆ ಆಹಾರ
ವನ್ನು ಕೊಡಲೆಂದು ರೈತನು ಅದರಲ್ಲಿ ಸಸಿಯನ್ನು ನೆಟ್ಟು ಬೆಳೆಸು
ತ್ತಾನೆ. ಅದು ಜನರಿಗೆ ಉಪಯುಕ್ತವಾದ ಬೆಳೆಗಳನ್ನು ಬೆಳೆಸಿದರೆ,
ಅದಕ್ಕೆ ದೇವರಿಂದ ಆಶೀರ್ವಾದ ದೊರೆಯುತ್ತದೆ. [8]ಆದರೆ ಅದು
ಮುಳ್ಳುಗಿಡಗಳನ್ನೂ ಕಳೆಯನ್ನೂ ಬೆಳೆಸಿದರೆ ನಿಷ್ಪ್ರಯೋಜಕ
ವಾಗಿ ದೇವರ ಶಾಪಕ್ಕೆ ಗುರಿಯಾಗುತ್ತದೆ. ಆ ಭೂಮಿಯನ್ನು
ಬೆಂಕಿಯಿಂದ ಸುಟ್ಟು ನಾಶಮಾಡಲಾಗುವುದು.

[9]ಪ್ರಿಯ ಸ್ನೇಹಿತರೇ, ನಾವು ಈ ಸಂಗತಿಗಳನ್ನು ನಿಮಗೆ ಹೇಳು
ತ್ತಿದ್ದರೂ ನಿಮ್ಮಿಂದ ಇದಕ್ಕಿಂತಲೂ ಉತ್ತಮವಾದ ಕಾರ್ಯ
ಗಳನ್ನು ಅಪೇಕ್ಷಿಸುತ್ತೇವೆ. ರಕ್ಷಣೆಗೆ ಸಂಬಂಧಿಸಿದ ಕಾರ್ಯ
ಗಳನ್ನು ನೀವು ಮಾಡುತ್ತೀರೆಂದು ನಾವು ದೃಢವಾಗಿ ನಂಬಿದ್ದೇವೆ.
[10]ದೇವರು ನ್ಯಾಯವಂತನಾಗಿದ್ದಾನೆ. ನೀವು ಮಾಡಿದ ಉಪ
ಕಾರವನ್ನು ಮತ್ತು ದೇವಜನರಿಗೆ ಸಹಾಯ ಮಾಡಿದ್ದರ ಮೂಲಕ
ಮತ್ತು ಸಹಾಯ ಮಾಡುತ್ತಲೇ ಇರುವುದರ ಮೂಲಕ ನೀವು
ಆತನಿಗೆ ತೋರಿದ ಪ್ರೀತಿಯನ್ನು ಆತನು ಮರೆತುಬಿಡುವು ದಿಲ್ಲ.
[11]ನಿಮ್ಮಲ್ಲಿ ಪ್ರತಿಯೊಬ್ಬರು ತಮ್ಮ ಇಡೀ ಜೀವನದಲ್ಲಿ ಇದೇ
ಆಸಕ್ತಿಯುಳ್ಳವರಾಗಿ ನಿಮ್ಮ ನಿರೀಕ್ಷೆಯನ್ನು ದೃಢಪಡಿಸಿಕೊಳ್ಳ
ಬೇಕೆಂದು ನಾವು ಅಪೇಕ್ಷಿಸುತ್ತೇವೆ. [12]ನೀವು ಸೋಮಾರಿ
ಗಳಾಗಿರಬೇಕೆಂಬುದು ನಮ್ಮ ಅಪೇಕ್ಷೆಯಲ್ಲ. ದೇವರ ವಾಗ್ದಾ
ನದ ಫಲಗಳನ್ನು ಪಡೆಯುವ ಜನರಂತೆ ನೀವಿರಬೇಕೆಂಬುದು
ನಮ್ಮ ಅಪೇಕ್ಷೆ. ಆ ಜನರಿಗೆ ನಂಬಿಕೆ ಮತ್ತು ತಾಳ್ಮೆ ಯಿದ್ದುದರಿಂದ
ಅವರು ದೇವರ ವಾಗ್ದಾನದಂತೆ ಫಲವನ್ನು ಪಡೆದರು.

[13]ದೇವರು ಅಬ್ರಹಾಮನಿಗೆ ಒಂದು ವಾಗ್ದಾನ ಮಾಡಿದನು.
ದೇವರಿಗಿಂತ ದೊಡ್ಡವನಿಲ್ಲ. ಆದ್ದರಿಂದ, ದೇವರು ತನ್ನ
ಮೇಲೆಯೇ ಆಣೆಯಿಟ್ಟು ತನ್ನ ಮಾತಿನಂತೆ ತಾನು ಮಾಡಿದನು.
[14]ಆತನು ಅವನಿಗೆ, ‘‘ನಾನು ನಿಜವಾಗಿಯೂ ನಿನ್ನನ್ನು
ಆಶೀರ್ವದಿಸುತ್ತೇನೆ. ಅನೇಕಾನೇಕ ಸಂತತಿಗಳನ್ನು ನಿನಗೆ
ದಯಪಾಲಿಸುವೆನು’’ * ಎಂದು ಹೇಳಿದನು. [15]ಅಬ್ರಹಾಮನು
ಇದರ ನೆರವೇರುವಿಕೆಗಾಗಿ ತಾಳ್ಮೆಯಿಂದ ಕಾದಿದ್ದನು. ತರು
ವಾಯ ಅವನಿಗೆ ದೇವರ ವಾಗ್ದಾನದ ಫಲ ದೊರೆಯಿತು.

[16]ಜನರು ವಾಗ್ದಾನ ಮಾಡುವಾಗ ಯಾವಾಗಲೂ ತಮಗಿಂತ
ದೊಡ್ಡವರಾದ ಯಾರಾದರೊಬ್ಬರನ್ನು ಬಳಸಿಕೊಳ್ಳುತ್ತಾರೆ.
ಅವರು ಹೇಳಿದ್ದು ನಿಜವೆಂಬುದನ್ನು ಆ ವಾಗ್ದಾನವು ಶ್ರುತಪಡಿಸು
ತ್ತದೆ. ಇದರಿಂದಾಗಿ ಅವರ ಎಲ್ಲಾ ವಾಗ್ದಾದಗಳಿಗೆ ಕೊನೆ
ಯುಂಟಾಗುತ್ತದೆ. [17]ಹಾಗೆಯೇ ದೇವರು ತನ್ನ ವಾಗ್ದಾನವನ್ನು
ಬಾಧ್ಯವಾಗಿ ಪಡೆಯುವ ಜನರಿಗೆ ತನ್ನ ಸಂಕಲ್ಪವು ಸ್ಥಿರವಾದದ್ದು
ಎಂಬುದನ್ನು ಸ್ಪಷ್ಟಪಡಿಸಲು ಆಣೆಯಿಟ್ಟು ನಿಶ್ಚಯ ಪಡಿಸಿದನು.
[18]ದೇವರ ವಾಗ್ದಾನ ಮತ್ತು ಆಣೆ ಅಚಲವಾದ ಎರಡು ಆಧಾರ
ಗಳಾಗಿವೆ. ಇವುಗಳ ವಿಷಯದಲ್ಲಿ ನಮಗೆಂದಿಗೂ ಮೋಸ
ವಾಗುವುದಿಲ್ಲ. ಇದರಿಂದಾಗಿ, ದೇವರ ರಕ್ಷಣೆಗಾಗಿ ಓಡಿ
ಬಂದಿರುವ ನಾವು ನಮ್ಮ ನಿರೀಕ್ಷೆಯಲ್ಲಿ ಸ್ಥಿರವಾಗಿರಲು ಬಲ
ವಾದ ಪ್ರೋತ್ಸಾಹ ಉಂಟಾಯಿತು. [19]ನಮಗೆ ಈ ನಿರೀಕ್ಷೆಯಿದೆ.
ಅದು ನಮ್ಮ ಆತ್ಮಗಳನ್ನು ಅಪಾಯದಲ್ಲಿ ಕೊಚ್ಚಿಕೊಂಡು ಹೋಗ
ದಂತೆ ಕಾಪಾಡುವ ಬಲವಾದ ಸ್ಥಿರವಾದ ಲಂಗರಿನಂತಿದೆ. ಅದು
ಸ್ವರ್ಗದಾಲಯದ ತೆರೆಯ ಮರೆಯಲ್ಲಿರುವ ಮಹಾಪವಿತ್ರ
ಸ್ಥಳದ ಒಳಕ್ಕೆ ಪ್ರವೇಶಿಸುತ್ತದೆ. [20]ಯೇಸು ಈಗಾಗಲೇ ಅಲ್ಲಿಗೆ
ಪ್ರವೇಶಿಸಿ, ಅನುಸರಿಸುವುದಕ್ಕಾಗಿ ಮಾರ್ಗವನ್ನು ತೋರಿದನು.
ಯೇಸು ಮೆಲ್ಕಿಜೆದೇಕನಂತೆ ಸದಾಕಾಲಕ್ಕೂ ಇರುವ ಪ್ರಧಾನ
ಯಾಜಕನಾಗಿದ್ದಾನೆ.

### ಯಾಜಕ ಮೆಲ್ಕಿಜೆದೇಕ

7 ಮೆಲ್ಕಿಜೆದೇಕನು ಸಾಲೇಮಿನ ರಾಜನಾಗಿದ್ದನು. ಮತ್ತು
ಪರಾತ್ಪರನಾದ ದೇವರ ಯಾಜಕನಾಗಿದ್ದನು.
ಅಬ್ರಹಾಮನು ರಾಜರುಗಳನ್ನು ಸೋಲಿಸಿದ ನಂತರ
ಹಿಂದಿರುಗಿ ಬರುತ್ತಿರುವಾಗ ಅವನು ಅಬ್ರಹಾಮನನ್ನು ಸಂಧಿಸಿ
ಆಶೀರ್ವದಿಸಿದನು. [2]ಅಬ್ರಹಾಮನು ಅವನಿಗೆ ತನ್ನಲ್ಲಿದ್ದ ಎಲ್ಲಾ
ವಸ್ತುಗಳಲ್ಲಿ ಹತ್ತನೆಯ ಒಂದು ಭಾಗವನ್ನು ಕೊಟ್ಟನು.
(ಸಾಲೇಮಿನ ರಾಜನಾದ ಮೆಲ್ಕಿಜೆದೇಕನೆಂಬ ಹೆಸರಿಗೆ ಎರಡು
ಅರ್ಥಗಳಿವೆ. ಮೆಲ್ಕಿಜೆದೇಕನೆಂದರೆ, ‘‘ನೀತಿರಾಜ’’ ಎಂಬರ್ಥ.
ಮತ್ತು ‘‘ಸಾಲೇಮಿನ ರಾಜ’’ ನೆಂದರೆ ‘‘ಸಮಾಧಾನದ ರಾಜ’’
ಎಂದರ್ಥ.) [3]ಮೆಲ್ಕಿಜೆದೇಕನ ತಂದೆತಾಯಿಗಳು ಯಾರೆಂಬು
ದಾಗಲಿ ಅವನು ಎಲ್ಲಿಂದ ಬಂದನೆಂಬುದಾಗಲಿ ಅವನು
ಯಾವಾಗ ಹುಟ್ಟಿದನೆಂಬುದಾಗಲಿ ಅವನು ಯಾವಾಗ ಸತ್ತ
ನೆಂಬುದಾಗಲಿ ಯಾರಿಗೂ ತಿಳಿದಿಲ್ಲ. ಅವನು ದೇವರ ಮಗ
ನಂತೆ ಸದಾಕಾಲವೂ ಯಾಜಕನಾಗಿದ್ದಾನೆ.

---

**ನಾನು … ದಯಪಾಲಿಸುವೆನು** ಆದಿಕಾಂಡ 22;17.

4ಮೆಲ್ಕಿಜೆದೇಕನು ಎಷ್ಟು ದೊಡ್ಡವನೆಂಬುದನ್ನು ಸ್ವಲ್ಪ
ಆಲೋಚಿಸಿರಿ. ನಮ್ಮ ಮೂಲ ಪಿತೃವಾದ ಅಬ್ರಹಾಮನು,
ಯುದ್ಧದಲ್ಲಿ ತಾನು ಜಯಿಸಿದ್ದರಲ್ಲಿ ಹತ್ತನೆಯ ಒಂದು
ಭಾಗವನ್ನು ಅವನಿಗೆ ಕೊಟ್ಟನು. 5ಲೇವಿಯಕುಲದ ಜನರಲ್ಲಿ
ಯಾಜಕರಾಗುವವರು ಯೆಹೂದ್ಯರಿಂದ ಹತ್ತನೆಯ ಒಂದು
ಭಾಗವನ್ನು ಪಡೆಯಬೇಕೆಂದು ಧರ್ಮಶಾಸ್ತ್ರವು ಹೇಳುತ್ತದೆ.
ಯಾಜಕರು ತಮ್ಮ ಸ್ವಂತ ಜನರಿಂದಲೇ (ಯೆಹೂದ್ಯರು)
ಅದನ್ನು ಸಂಗ್ರಹಿಸುತ್ತಾರೆ ಮತ್ತು ಅವರ ಜನರು ಅಬ್ರ ಹಾಮನ
ಕುಟುಂಬಕ್ಕೆ ಸೇರಿದವರಾಗಿದ್ದಾರೆ. 6ಮೆಲ್ಕಿಜೆದೇಕನು ಲೇವಿ
ಯರ ಕುಲಕ್ಕೆ ಸೇರಿದವನಾಗಿರಲಿಲ್ಲ. ಆದರೆ ಅವನು ಹತ್ತನೆ
ಒಂದು ಭಾಗವನ್ನು ಅಬ್ರಹಾಮನಿಂದ ಪಡೆದನು. ದೇವರ
ವಾಗ್ದಾನಗಳನ್ನು ಹೊಂದಿದ್ದ ಅಬ್ರಹಾಮನನ್ನು ಅವನು
ಆಶೀರ್ವದಿಸಿದನು. 7ಮುಖ್ಯನಾದ ವ್ಯಕ್ತಿಯು ಅಲ್ಪನಾದವನಿಗೆ
ಆಶೀರ್ವಾದ ಮಾಡುತ್ತಾನೆಂಬುದು ಜನರೆಲ್ಲರಿಗೂ ತಿಳಿದಿರುವ
ವಿಷಯ. 8ಯಾಜಕರು ಹತ್ತನೆಯ ಒಂದು ಭಾಗವನ್ನು ಪಡೆಯು
ತ್ತಾರೆ. ಆದರೆ ಅವರು ಸ್ವಲ್ಪಕಾಲ ಜೀವಿಸಿದ್ದು ನಂತರ ಸಾಯು
ತ್ತಾರೆ. ಆದರೆ ಅಬ್ರಹಾಮನಿಂದ ಹತ್ತನೆಯ ಒಂದು ಭಾಗವನ್ನು
ಪಡೆದ ಮೆಲ್ಕಿಜೆದೇಕನು ಜೀವಂತನಾಗಿಯೇ ಇರುತ್ತಾನೆಂದು
ಪವಿತ್ರ ಗ್ರಂಥವು ಹೇಳುತ್ತದೆ. 9ಲೇವಿಯರು ಜನರಿಂದ
ಹತ್ತನೆಯ ಒಂದು ಭಾಗವನ್ನು ತೆಗೆದುಕೊಳ್ಳುತ್ತಾರೆ. ಆದರೆ
ಅಬ್ರಹಾಮನು ಮೆಲ್ಕಿಜೆದೇಕನಿಗೆ ಹತ್ತನೆಯ ಒಂದು ಭಾಗವನ್ನು
ಕೊಟ್ಟನೆಂದರೆ, ಲೇವಿಯೂ ಕೊಟ್ಟಂತಾಯಿತೆಂದು ಹೇಳ
ಬಹುದು.

10ಲೇವಿಯು ಇನ್ನೂ ಹುಟ್ಟಿರಲಿಲ್ಲ. ಆದರೆ ಮೆಲ್ಕಿಜೆ
ದೇಕನು ಅಬ್ರಹಾಮನನ್ನು ಎದುರುಗೊಂಡಾಗ, ಲೇವಿಯು
ತನ್ನ ಪೂರ್ವಿಕನಾದ ಅಬ್ರಹಾಮನ ದೇಹದಲ್ಲಿದ್ದನು.

11ಲೇವಿ ಕುಲದ ಯಾಜಕತ್ವದ ಆಧಾರದ ಮೇಲೆ ಧರ್ಮ
ಶಾಸ್ತ್ರವನ್ನು ಜನರಿಗೆ ಕೊಡಲಾಯಿತು.ಆದರೆ ಆ ಯಾಜಕತ್ವ
ದಿಂದ ಜನರನ್ನು ಆತ್ಮಿಕತೆಯಲ್ಲಿ ಪರಿಪೂರ್ಣರನ್ನಾಗಿ ಮಾಡಲು
ಸಾಧ್ಯವಾಗಲಿಲ್ಲ. ಆದ್ದರಿಂದ ಬೇರೊಂದು ರೀತಿಯ
ಯಾಜಕನು ಬರುವುದು ಅತ್ಯವಶ್ಯಕವಾಗಿತ್ತು. ಅಂದರೆ ಮೆಲ್ಕಿಜೆ
ದೇಕನಂತಹ ಯಾಜಕನೇ ಹೊರತು ಆರೋನನಂತವನಲ್ಲ
ಎಂಬುದು ಅದರ ಅರ್ಥ. 12ಬೇರೊಬ್ಬ ಯಾಜಕನು ಬಂದರೆ,
ಆಗ ಧರ್ಮಶಾಸ್ತ್ರವು ಬದಲಾಗಲೇಬೇಕು. 13ನಾವು ಕ್ರಿಸ್ತನನ್ನು
ಕುರಿತು ಇವುಗಳನ್ನು ಹೇಳುತ್ತಿರುವೆವು. ಆತನು ಬೇರೊಂದು
ಕುಲಕ್ಕೆ ಸೇರಿದವನು. ಆ ಕುಲದ ಯಾರೇ ಆಗಲಿ ಎಂದೂ
ಯಾಜಕರಾಗಿ ಸೇವೆ ಮಾಡಿರಲಿಲ್ಲ. 14ನಮ್ಮ ಪ್ರಭು (ಕ್ರಿಸ್ತನು)
ಯೆಹೂದಕುಲದಿಂದ ಬಂದವನೆಂಬುದು ಸ್ಪಷ್ಟವಾಗಿದೆ. ಆ
ಕುಲಕ್ಕೆ ಸೇರಿದ ಯಾಜಕರನ್ನು ಕುರಿತು ಮೋಶೆಯು ಏನನ್ನೂ
ಹೇಳಿರುವುದಿಲ್ಲ.

**ಯೇಸು ಮೆಲ್ಕಿಜೆದೇಕನಂತಹ ಯಾಜಕನು**

15ಇವು ಮತ್ತಷ್ಟು ಸ್ಪಷ್ಟವಾಗಿವೆ. ಮೆಲ್ಕಿಜೆದೇಕನಂತಹ
ಮತ್ತೊಬ್ಬ ಯಾಜಕನು (ಯೇಸು) ಬರುತ್ತಾನೆ ಎಂಬುದನ್ನು
ನಾವು ನೋಡುತ್ತಿದ್ದೇವೆ. 16ಆತನು ಯಾಜಕನಾದದ್ದು ವಂಶಾ
ನುಗತವಾಗಿ ಬಂದ ನಿಯಮಗಳ ಮತ್ತು ಶಾಸ್ತ್ರಗಳ ಪ್ರಕಾರವಲ್ಲ.
ಆತನು ನಾಶವಾಗದ ತನ್ನ ಜೀವ ಶಕ್ತಿಯಿಂದ ಯಾಜಕನಾದನು.
17ಪವಿತ್ರ ಗ್ರಂಥದಲ್ಲಿ ಆತನನ್ನು ಕುರಿತು ಹೀಗೆ ಹೇಳಿದೆ: ‘‘ನೀನು
ಮೆಲ್ಕಿಜೆದೇಕನಂತೆ ಸದಾಕಾಲವೂ ಯಾಜಕನಾಗಿರುವೆ.’’ *
18ಹಳೆಯ ನಿಯಮವು ದುರ್ಬಲವೂ ನಿಷ್ಪ್ರಯೋಜಕವೂ
ಆಗಿದ್ದರಿಂದ ರದ್ದಾಯಿತು. 19ಮೋಶೆಯ ಧರ್ಮಶಾಸ್ತ್ರವು
ಯಾವುದನ್ನೂ ಸಿದ್ಧಿಗೆ ತರಲಿಲ್ಲ. ಈಗ ನಮಗೆ ಉತ್ತಮವಾದ
ಒಂದು ನಿರೀಕ್ಷೆಯನ್ನು ಕೊಡಲಾಗಿದೆ. ಈ ನಿರೀಕ್ಷೆಯು
ನಮ್ಮನ್ನು ದೇವರ ಬಳಿಗೆ ಕೊಂಡೊಯ್ಯಬಲ್ಲದು.

20ದೇವರು ಯೇಸುವನ್ನು ಪ್ರಧಾನಯಾಜಕನನ್ನಾಗಿ ಮಾಡಿ
ದಾಗ, ಒಂದು ವಾಗ್ದಾನವನ್ನೂ ಮಾಡಿದನು. ಆದರೆ ಬೇರೆ
ಯವರು ಯಾಜಕರಾದಾಗ ಆತನು ವಾಗ್ದಾನ ಮಾಡಲಿಲ್ಲ.
21ಕ್ರಿಸ್ತನು ದೇವರ ವಾಗ್ದಾನದಂತೆ ಯಾಜಕನಾದನು. ದೇವರು
ಆತನಿಗೆ ಹೇಳಿದ್ದೇನೆಂದರೆ:

> ‘‘‘ನೀನು ಸದಾಕಾಲವೂ ಯಾಜಕನಾಗಿರುವೆ’
> ಎಂದು ಪ್ರಭುವೆಂಬ ನಾನು ವಾಗ್ದಾನ ಮಾಡಿ
> ದೇನು. ಇದಕ್ಕಾಗಿ ನಾನೆಂದಿಗೂ ಪಶ್ಚಾತ್ತಾಪ
> ಪಡುವುದಿಲ್ಲ.’’
>
> *ಕೀರ್ತನೆ 110:4*

22ದೇವರು ತನ್ನ ಜನರೊಂದಿಗೆ ಮಾಡಿಕೊಂಡ ಶ್ರೇಷ್ಠವಾದ
ಒಪ್ಪಂದಕ್ಕೆ ಯೇಸುವೇ ಆಧಾರ ಎಂಬುದೇ ಇದರರ್ಥ.

23ಇದಲ್ಲದೆ ಇತರ ಯಾಜಕರಲ್ಲಿ ಒಬ್ಬನು ಸತ್ತಾಗ, ಅವನು
ಶಾಶ್ವತವಾಗಿ ಯಾಜಕನಾಗಿ ಮುಂದುವರೆಯಲಾಗಲಿಲ್ಲ. ಆದ್ದ
ರಿಂದ ಅಲ್ಲಿ ಅನೇಕ ಮಂದಿ ಯಾಜಕರಿದ್ದರು. 24ಆದರೆ ಯೇಸು
ಸದಾಕಾಲವೂ ಜೀವಿಸುವವನಾಗಿದ್ದಾನೆ. ಆತನು ತನ್ನ ಯಾಜಕ
ಸೇವೆಯನ್ನು ಎಂದೆಂದಿಗೂ ನಿಲ್ಲಿಸುವುದಿಲ್ಲ. 25ಆದುದ
ರಿಂದಲೇ ತನ್ನ ಮೂಲಕ ದೇವರ ಬಳಿಗೆ ಬರುವ ಜನರನ್ನು
ಯೇಸು ಯಾವಾಗಲೂ ರಕ್ಷಿಸಬಲ್ಲನು. ಏಕೆಂದರೆ ಆತನು ಸದಾ
ಕಾಲ ಜೀವಿಸುವವನಾಗಿದ್ದಾನೆ ಮತ್ತು ಜನರು ದೇವರ ಸನ್ನಿಧಿಗೆ
ಬಂದಾಗ ಜನರಿಗೆ ಸಹಾಯ ಮಾಡಲು ಸಿದ್ಧನಾಗಿದ್ದಾನೆ.

26ಯೇಸುವೇ ನಮಗೆ ಬೇಕಾಗಿದ್ದ ಪ್ರಧಾನ ಯಾಜಕನು.
ಆತನು ಪಾಪರಹಿತನೂ ಪರಿಶುದ್ಧನೂ ನಿಷ್ಕಳಂಕನೂ ಪಾಪಿಗಳ
ಪ್ರಭಾವಕ್ಕೆ ಒಳಗಾಗದವನೂ ಆಕಾಶ ಮಂಡಲಕ್ಕಿಂತ
ಉನ್ನತನೂ ಆಗಿದ್ದಾನೆ. 27ಆತನು ಬೇರೆ ಯಾಜಕರಂತಲ್ಲ.
ಅವರಾದರೊ ಪ್ರತಿದಿನವೂ ಯಜ್ಞಗಳನ್ನುಅರ್ಪಿಸಬೇಕು.
ಅವರು ತಮ್ಮ ಸ್ವಂತ ಪಾಪಗಳಿಗಾಗಿ ಯಜ್ಞಗಳನ್ನು ಅರ್ಪಿಸಿದ
ನಂತರ ಬೇರೆಯವರ ಪಾಪಗಳಿಗಾಗಿ ಅರ್ಪಿಸಬೇಕು. ಆದರೆ
ಕ್ರಿಸ್ತನು ಹಾಗೆ ಮಾಡಬೇಕಾಗಿಲ್ಲ. ಆತನು ತನ್ನನ್ನೇ ಯಜ್ಞವಾಗಿ
ಅರ್ಪಿಸಿಕೊಂಡು ಒಂದೇ ಸಾರಿ ಆ ಕೆಲಸವನ್ನು ಮಾಡಿ ಮುಗಿಸಿ
ದನು. 28ಧರ್ಮಶಾಸ್ತ್ರವು ಮನುಷ್ಯರೊಳಗಿಂದ ಪ್ರಧಾನ
ಯಾಜಕರನ್ನು ಆರಿಸುತ್ತದೆ. ಆರಿಸಲ್ಪಟ್ಟ ಈ ಜನರು ಮಾನವ
ದೌರ್ಬಲ್ಯಗಳನ್ನು ಹೊಂದಿದವರಾಗಿದ್ದಾರೆ. ಆದರೆ ದೇವರು
ಧರ್ಮಶಾಸ್ತ್ರದ ನಂತರ ಮಾಡಿದ ವಾಗ್ದಾನ ದೇವರ ಮಗನನ್ನು
ಪ್ರಧಾನಯಾಜಕನನ್ನಾಗಿ ಮಾಡಿತು. ಆ ಮಗನು ಎಂದೆಂದಿಗೂ
ಸರ್ವಸಂಪೂರ್ಣನಾಗಿ ಮಾಡಲ್ಪಟ್ಟಿದ್ದಾನೆ.

---

**ನೀನು … ಯಾಜಕನಾಗಿರುವೆ** ಕೀರ್ತನೆ 110:4.

### ಯೇಸುವೇ ನಮ್ಮ ಪ್ರಧಾನ ಯಾಜಕನು

8 ನಾವು ಹೇಳುವ ಸಂಗತಿಗಳಲ್ಲಿ ಮುಖ್ಯವಾದದ್ದೇನೆಂದರೆ,
ನಿಮಗೆ ಹೇಳಿದಂತೆಯೇ ನಮಗೊಬ್ಬ ಪ್ರಧಾನ
ಯಾಜಕನಿದ್ದಾನೆ. ಆತನು ಪರಲೋಕದಲ್ಲಿ ದೇವರ ಸಿಂಹಾ
ಸನದ ಬಲಭಾಗದಲ್ಲಿ ಈಗ ಕುಳಿತುಕೊಂಡಿದ್ದಾನೆ. 2ಆತನು
ಮಹಾಪವಿತ್ರ ಸ್ಥಳದಲ್ಲಿ ಅಂದರೆ ಜನರಿಂದ ನಿರ್ಮಿತವಾಗದೆ,
ದೇವರಿಂದಲೇ ನಿರ್ಮಿಸಲ್ಪಟ್ಟಿರುವ ನಿಜವಾದ ದೇವದರ್ಶನ
ಗುಡಾರದಲ್ಲಿ ಸೇವೆಮಾಡುತ್ತಿದ್ದಾನೆ.

3ಪ್ರತಿಯೊಬ್ಬ ಪ್ರಧಾನಯಾಜಕನೂ ದೇವರಿಗೆ ಯಜ್ಞ
ಗಳನ್ನೂ ಕಾಣಿಕೆಗಳನ್ನೂ ಅರ್ಪಿಸಬೇಕು. ಆದುದರಿಂದ ನಮ್ಮ
ಪ್ರಧಾನಯಾಜಕನೂ ದೇವರಿಗೆ ಏನನ್ನಾದರೂ ಅರ್ಪಿಸಲೇ
ಬೇಕು. 4ಆತನು ಇನ್ನೂ ಭೂಮಿಯ ಮೇಲೆ ವಾಸಮಾಡುತ್ತಿದ್ದರೆ
ಯಾಜಕನಾಗಿರುತ್ತಿರಲಿಲ್ಲ. ಕಾರಣವೇನಂದರೆ, ಧರ್ಮ
ಶಾಸ್ತ್ರದ ಪ್ರಕಾರ ದೇವರಿಗೆ ಕಾಣಿಕೆಗಳನ್ನು ಅರ್ಪಿಸುವ
ಯಾಜಕರು ಈಗಾಗಲೇ ಇಲ್ಲಿದ್ದಾರೆ. 5ಈ ಯಾಜಕರು
ಮಾಡುವ ಕಾರ್ಯಗಳು ಪರಲೋಕದಲ್ಲಿನ ಕಾರ್ಯಗಳ
ನಿಜವಾದ ಪ್ರತಿರೂಪಗಳೂ ಛಾಯೆಗಳೂ ಆಗಿವೆ. ಮೋಶೆಯು
ದೇವದರ್ಶನ ಗುಡಾರವನ್ನು ನಿರ್ಮಿಸಲು ಸಿದ್ಧನಾದಾಗ
ದೇವರು ಅವನಿಗೆ, ‘‘ನಾನು ಬೆಟ್ಟದಲ್ಲಿ ನಿನಗೆ ತೋರಿಸಿದ
ಮಾದರಿಯ ಪ್ರಕಾರವೇ ಎಲ್ಲವನ್ನೂ ಎಚ್ಚರಿಕೆಯಿಂದ
ನಿರ್ಮಿಸಬೇಕು’’ * ಎಂದು ಹೇಳಿದ್ದು ಈ ಕಾರಣದಿಂದಲೇ.
6ಆದರೆ ಯೇಸುವಿಗೆ ಕೊಡಲ್ಪಟ್ಟ ಕಾರ್ಯವು ಆ ಯಾಜಕರಿಗೆ
ಕೊಡಲ್ಪಟ್ಟ ಕಾರ್ಯಕ್ಕಿಂತ ಅತ್ಯಂತ ಮಹತ್ವದ್ದಾಗಿದೆ. ಇದೇ
ರೀತಿಯಲ್ಲಿ ಯೇಸು ತನ್ನ ಜನರಿಗಾಗಿ ದೇವರಿಂದ ತಂದ ಹೊಸ
ಒಪ್ಪಂದವು ಹಳೆಯದಕ್ಕಿಂತ ಶ್ರೇಷ್ಠವಾಗಿದೆ. ಉತ್ತಮ ಸಂಗತಿಗಳ
ವಾಗ್ದಾನದ ಆಧಾರದ ಮೇಲೆ ಹೊಸ ಒಪ್ಪಂದವು ಸ್ಥಾಪಿತ
ವಾಗಿದೆ.

7ಮೊದಲನೆ ಒಪ್ಪಂದ ಏನೂ ದೋಷವಿಲ್ಲದ್ದಾಗಿದ್ದರೆ,
ಎರಡನೆ ಒಡಂಬಡಿಕೆಯ ಅಗತ್ಯವೇ ಇರಲಿಲ್ಲ. 8ಆದರೆ ದೇವರು
ಜನರಲ್ಲೇನೋ ದೋಷವನ್ನು ಕಂಡು ಹೇಳಿದ್ದೇನೆಂದರೆ:

‘‘ಇಸ್ರೇಲರೊಡನೆಯೂ ಯೆಹೂದ್ಯ
ರೊಡನೆಯೂ ನಾನು ಹೊಸ ಒಡಂಬಡಿಕೆ
ಮಾಡಿಕೊಳ್ಳುವ ಕಾಲ ಬರುತ್ತಿದೆ ಎಂದು ಪ್ರಭು
ಹೇಳುತ್ತಾನೆ.
9 ಅದು, ಅವರ ಪಿತೃಗಳೊಡನೆ ನಾನು ಮಾಡಿ
ಕೊಂಡ ಒಡಂಬಡಿಕೆಯಂತಿರುವುದಿಲ್ಲ. ಅವ
ರನ್ನು ಈಜಿಪ್ಟಿನಿಂದ ಕೈಹಿಡಿದು ಹೊರಗೆ ಕರೆದು
ಕೊಂಡು ಬಂದ ಕಾಲದಲ್ಲಿ ಅವರೊಡನೆ ಆ
ಒಡಂಬಡಿಕೆಯನ್ನೂ ಮಾಡಿಕೊಂಡೆನು. ಆದರೆ
ಅವರು ಅದನ್ನು ಅನುಸರಿಸಲಿಲ್ಲವಾದ್ದರಿಂದ
ಅವರಿಗೆ ವಿಮುಖನಾದೆನು ಎಂದು ಪ್ರಭು
ಹೇಳುತ್ತಾನೆ.
10 ನಾನು ಇಸ್ರೇಲರೊಡನೆ ಮುಂದಿನ ದಿನಗಳಲ್ಲಿ
ಮಾಡಿಕೊಳ್ಳುವ ಹೊಸ ಒಡಂಬಡಿಕೆಯು
ಇಂತಿದೆ: ನನ್ನ ಆಜ್ಞೆಗಳನ್ನು ಅವರ ಮನಸ್ಸಿನಲ್ಲಿ
ಇರಿಸುವೆನು; ಅವರ ಹೃದಯದ ಮೇಲೆ ಬರೆ
ಯುವೆನು; ನಾನು ಅವರ ದೇವರಾಗಿರುವೆನು;
ಅವರು ನನ್ನ ಜನರಾಗಿರುವರು.
11 ಒಬ್ಬನು ಸಹೋದರನಿಗಾಗಲಿ, ಬೇರೆಯವರಿ
ಗಾಗಲಿ ಬೋಧಿಸಬೇಕಾಗಿರುವುದಿಲ್ಲ; ದೇವ
ರನ್ನು ತಿಳಿದುಕೊಳ್ಳಿ ಎಂದು ಹೇಳಬೇಕಾಗಿರು
ವುದಿಲ್ಲ. ಏಕೆಂದರೆ ಅತ್ಯಂತ ಪ್ರಮುಖರನ್ನು
ಮೊದಲುಗೊಂಡು ಅತ್ಯಂತ ಅಲ್ಪರಾದವ
ರೆಲ್ಲರೂ ನನ್ನನ್ನು ತಿಳಿದುಕೊಂಡಿರುವರು.
12 ಅವರು ನನ್ನ ವಿರುದ್ಧವಾಗಿ ಮಾಡುವ ಎಲ್ಲಾ
ಕೆಟ್ಟಕಾರ್ಯಗಳನ್ನು ಕ್ಷಮಿಸುವೆನು; ಅವರ
ಪಾಪಗಳನ್ನು ನೆನಪಿಗೆ ತಂದುಕೊಳ್ಳುವುದಿಲ್ಲ.’’
*ಯೆರೆಮೀಯ 31:31-34*

13ದೇವರು ಇದನ್ನು ಹೊಸ ಒಡಂಬಡಿಕೆ ಎಂದು ಕರೆದನು.
ಆದ್ದರಿಂದ ಮೊದಲನೆ ಒಡಂಬಡಿಕೆಯನ್ನು ದೇವರು ಹಳೆಯ
ದಾಗಿ ಮಾಡಿದನು. ಯಾವುದು ಹಳೆಯದಾಗಿ ಉಪಯೋಗಕ್ಕೆ
ಬಾರದಾಗುತ್ತದೋ ಅದು ಅದೃಶ್ಯವಾಗುವುದು.

### ಹಳೆಯ ಒಡಂಬಡಿಕೆಯ ಕ್ರಮಕ್ಕನುಸಾರವಾದ ಆರಾಧನೆ

9 ಮೊದಲನೆ ಒಪ್ಪಂದದಲ್ಲಿ ಆರಾಧನೆಯ ನಿಯಮ
ಗಳಿದ್ದುವು. ಅದರಲ್ಲಿ ಮಾನವ ನಿರ್ಮಿತವಾದ ಆರಾಧನಾ
ಸ್ಥಳವಿತ್ತು. 2ಈ ಸ್ಥಳವು ಗುಡಾರದ ಒಳಗಿತ್ತು. ಗುಡಾರದ
ಮೊದಲ ಆವರಣವನ್ನು ಪವಿತ್ರ ಸ್ಥಳವೆಂದು ಕರೆಯುತ್ತಿದ್ದರು.
ಪವಿತ್ರ ಸ್ಥಳದಲ್ಲಿ ದೀಪಸ್ತಂಭ, ಮೇಜು ಮತ್ತು ದೇವರಿಗೆ
ಅರ್ಪಿಸಲ್ಪಟ್ಟ ರೊಟ್ಟಿಗಳಿದ್ದುವು. 3ಎರಡನೆ ತೆರೆಯ ಹಿಂದೆ
‘ಮಹಾ ಪವಿತ್ರಸ್ಥಳ’ವೆಂದು ಕರೆಸಿಕೊಳ್ಳುವ ಒಂದು ಕೊಠಡಿ
ಯಿತ್ತು. 4ಮಹಾ ಪವಿತ್ರಸ್ಥಳದಲ್ಲಿ ಧೂಪವನ್ನು ಸುಡುವುದಕ್ಕಾಗಿ
ಬಂಗಾರದ ಯಜ್ಞವೇದಿಕೆಯಿತ್ತು. ಅಲ್ಲದೆ ಮೊದಲನೆ ಒಪ್ಪಂದ
ವನ್ನು ಇಡಲಾಗಿದ್ದ ಪವಿತ್ರ ಪೆಟ್ಟಿಗೆಯಿತ್ತು. ಅದಕ್ಕೆ ಚಿನ್ನದ
ತಗಡನ್ನು ಹೊದಿಸಲಾಗಿತ್ತು. ಅದರ ಒಳಗಡೆ ಚಿನ್ನದ ಪಾತ್ರೆಯ
ಲ್ಲಿಟ್ಟಿದ್ದ ಮನ್ನಾ ಮತ್ತು ಒಂದಾನೊಂದು ಕಾಲದಲ್ಲಿ ಚಿಗುರಿ
ಎಲೆಗಳನ್ನು ಬಿಟ್ಟಿದ್ದ ಆರೋನನ ಕೋಲು ಇದ್ದವು. ಅಲ್ಲದೆ ಆ
ಮೊದಲನೆ ಒಪ್ಪಂದದ ಹತ್ತು ಆಜ್ಞೆಗಳನ್ನು ಬರೆಯಲಾಗಿದ್ದ
ಕಲ್ಲಿನ ಹಲಗೆಗಳನ್ನು ಅದರಲ್ಲಿ ಇಡಲಾಗಿತ್ತು. 5ಆ ಪೆಟ್ಟಿಗೆಯ
ಮೇಲ್ಗಡೆ ದೇವರ ವೈಭವವನ್ನು ತೋರ್ಪಡಿಸುವ ಕೆರೂಬಿ
ಗಳಿದ್ದವು. ಈ ಕೆರೂಬಿಗಳು ಕೃಪಾಸನವನ್ನು ಆಚ್ಛಾದಿಸಿ
ಕೊಂಡಿದ್ದವು. ಆದರೆ ಇವುಗಳ ಕುರಿತು ಎಲ್ಲವನ್ನೂ ನಾವು ಈಗ
ಹೇಳಲು ಸಾಧ್ಯವಿಲ್ಲ.

6ನಾನು ನಿಮಗೆ ವಿವರಿಸಿದಂತೆಯೆ ಗುಡಾರದಲ್ಲಿ ಎಲ್ಲವನ್ನೂ
ಸಿದ್ಧ ಮಾಡಲಾಗಿತ್ತು. ಯಾಜಕರು ಪ್ರತಿದಿನವೂ ತಮ್ಮ
ಆರಾಧನೆಯ ಕರ್ತವ್ಯಗಳನ್ನು ಮಾಡಲು ಮೊದಲನೆ
ಕೊಠಡಿಯ ಒಳಗಡೆಗೆ ಹೋಗುತ್ತಿದ್ದರು. 7ಆದರೆ ಪ್ರಧಾನ
ಯಾಜಕನು ಮಾತ್ರ ಎರಡನೆ ಕೊಠಡಿಯ ಒಳಗೆ ಹೋಗ
ಬಹುದಿತ್ತು. ಅವನು ವರ್ಷಕ್ಕೊಮ್ಮೆ ಮಾತ್ರ ಅದರೊಳಗೆ
ಹೋಗುತ್ತಿದ್ದನು. ಅವನು ತನ್ನೊಂದಿಗೆ ರಕ್ತವನ್ನು ತೆಗೆದು

**ನಾನು … ನಿರ್ಮಿಸಬೇಕು** ವಿಮೋಚನ 25:40.

ಕೊಳ್ಳದೆ ಎಂದೂ ಅದರೊಳಗೆ ಪ್ರವೇಶಿಸುತ್ತಿರಲಿಲ್ಲ. ತನ
ಗೋಸ್ಕರವಾಗಿಯೂ ಜನರು ತಿಳಿಯದೆ ಮಾಡಿದ ಪಾಪಗಳಿ
ಗಾಗಿಯೂ ಅವನು ಆ ರಕ್ತವನ್ನು ದೇವರಿಗೆ ಅರ್ಪಿಸುತ್ತಿದ್ದನು.
8ಪವಿತ್ರಾತ್ಮನು ಆ ಎರಡು ಪ್ರತ್ಯೇಕವಾದ ಕೊಠಡಿಗಳ ಮೂಲಕ
ನಮಗೆ ತಿಳಿಸುವುದೇನಂದರೆ, ಮೊದಲನೆ ಕೊಠಡಿಯು ಅಲ್ಲಿ
ಇರುವವರೆಗೂ ಮಹಾ ಪವಿತ್ರಸ್ಥಳಕ್ಕೆ ಹೋಗುವ ಮಾರ್ಗವು
ತೆರೆಯಲೇ ಇಲ್ಲ. 9ಈ ದಿನ ನಮಗೆ ಇದೊಂದು ಉದಾಹರಣೆ
ಯಾಗಿದೆ. ದೇವರಿಗೆ ಅರ್ಪಿಸಲ್ಪಡುತ್ತಿದ್ದ ಕಾಣಿಕೆಗಳಿಗಾಗಲಿ
ಯಜ್ಞಗಳಿಗಾಗಲಿ ದೇವಾರಾಧನೆ ಮಾಡುವ ವ್ಯಕ್ತಿಯನ್ನು ಪರಿ
ಪೂರ್ಣನನ್ನಾಗಿ ಮಾಡಲು ಸಾಧ್ಯವಿರಲಿಲ್ಲ ಎಂಬುದನ್ನು ಇದು
ತೋರ್ಪಡಿಸುತ್ತದೆ. ಆ ವ್ಯಕ್ತಿಯ ಹೃದಯವನ್ನು ಪರಿಶುದ್ಧ
ಗೊಳಿಸಲು ಆ ಯಜ್ಞಗಳಿಗೆ ಸಾಧ್ಯವಿರಲಿಲ್ಲ. 10ಆ ಯಜ್ಞಗಳು
ಮತ್ತು ಕಾಣಿಕೆಗಳು ಅನ್ನಪಾನಾದಿಗಳನ್ನೂ ವಿಶೇಷವಾದ ಸ್ನಾನ
ಗಳನ್ನೂ ಕುರಿತಾಗಿದ್ದವು. ಅವು ದೇಹಕ್ಕೆ ಸಂಬಂಧಿಸಿದ ನಿಯಮ
ಗಳೇ ಹೊರತು ಜನರ ಹೃದಯಕ್ಕೆ ಸಂಬಂಧಿಸಿದ್ದವುಗಳಲ್ಲ.
ಜನರಿಗೆ ದೇವರ ಹೊಸ ಮಾರ್ಗವು ಲಭಿಸುವ ಕಾಲದವರೆಗೆ,
ಅವರು ಅನುಸರಿಸಲೆಂದು ಆ ನಿಯಮಗಳನ್ನು ದೇವರೇ
ಕೊಟ್ಟನು.

## ಹೊಸ ಒಡಂಬಡಿಕೆಗನುಸಾರವಾಗಿ ಆರಾಧನೆ

11ಆದರೆ ಕ್ರಿಸ್ತನು ಈಗಾಗಲೇ ಪ್ರಧಾನ ಯಾಜಕನಾಗಿ
ಬಂದಿದ್ದಾನೆ. ಈಗ ನಾವು ಹೊಂದಿರುವ ಉತ್ತಮ ಸಂಗತಿಗಳಿಗೆ
ಆತನು ಪ್ರಧಾನ ಯಾಜಕನಾಗಿದ್ದಾನೆ. ಇತರ ಯಾಜಕರಾದರೆ
ಗುಡಾರದಲ್ಲಿ ಸೇವೆಯನ್ನು ಮಾಡಿದರು, ಆದರೆ ಆತನು
ಗುಡಾರದಲ್ಲಿ ಸೇವೆ ಮಾಡದೆ ಅದಕ್ಕಿಂತಲೂ ಶ್ರೇಷ್ಠವಾದ ಸ್ಥಳ
ದಲ್ಲಿ ಸೇವೆ ಮಾಡುತ್ತಾನೆ. ಅದು ಮತ್ತಷ್ಟು ಪರಿಪೂರ್ಣ
ವಾದದ್ದು. ಅದು ಮನುಷ್ಯರಿಂದ ನಿರ್ಮಿತವಾದದ್ದಲ್ಲ. ಲೋಕಕ್ಕೆ
ಸೇರಿದ್ದೂ ಅಲ್ಲ. 12ಆತನು ಒಂದೇ ಒಂದು ಸಾರಿ ಮಹಾ
ಪವಿತ್ರಸ್ಥಳಕ್ಕೆ ಪ್ರವೇಶಿಸಿದನು. ಆತನು ಹೋತಗಳ ಮತ್ತು
ಹೋರಿಕರುಗಳ ರಕ್ತವನ್ನು ತೆಗೆದುಕೊಳ್ಳದೆ ತನ್ನ ಸ್ವಂತ
ರಕ್ತದಿಂದಲೇ ಮಹಾ ಪವಿತ್ರಸ್ಥಳಕ್ಕೆ ಪ್ರವೇಶಿಸಿ ನಮಗೆ ನಿತ್ಯ
ಸ್ವಾತಂತ್ರ್ಯವನ್ನು ತಂದುಕೊಟ್ಟನು. 13ಹೋತಗಳ ಮತ್ತು
ಹೋರಿಗಳ ರಕ್ತವನ್ನೂ ಹಸುಗಳ ಬೂದಿಯನ್ನೂ ಆ
ಆರಾಧನೆಯ ಸ್ಥಳದಲ್ಲಿ ಪ್ರವೇಶಿಸುವಷ್ಟು ಶುದ್ಧರಾಗಿಲ್ಲದ ಜನರ
ಮೇಲೆ ಚಿಮುಕಿಸಲಾಗುತ್ತಿತ್ತು. ಆ ರಕ್ತ ಮತ್ತು ಬೂದಿ ಜನರ
ದೇಹಗಳನ್ನು ಮಾತ್ರ ಶುದ್ಧಿಗೊಳಿಸುತ್ತಿದ್ದವು. 14ಆದ್ದರಿಂದ
ಆತನ ರಕ್ತವು ಖಚಿತವಾಗಿ ಅದಕ್ಕಿಂತಲೂ ಹೆಚ್ಚಿನದನ್ನು
ಸಾಧಿಸುತ್ತದೆ. ಆತನು ನಿತ್ಯಾತ್ಮನ ಮೂಲಕ ತನ್ನನ್ನು ತಾನೇ
ದೇವರಿಗೆ ನಿಷ್ಕಳಂಕವಾದ ಯಜ್ಞವನ್ನಾಗಿ ಅರ್ಪಿಸಿಕೊಂಡನು.
ಆತನ ರಕ್ತವು ನಮ್ಮನ್ನು ನಮ್ಮ ಕೆಟ್ಟಕಾರ್ಯಗಳಿಂದ ಪರಿಪೂರ್ಣ
ವಾಗಿ ಬಿಡಿಸಿ ನಾವು ಆತನನ್ನು ಜೀವಸ್ವರೂಪವಾದ ದೇವರನ್ನು
ಆರಾಧಿಸಲು ಸಾಧ್ಯವಾಗುವಂತೆ ನಮ್ಮ ಹೃದಯವನ್ನೂ
ಪರಿಶುದ್ಧಗೊಳಿಸುತ್ತದೆ.

15ದೇವರಿಂದ ಕರೆಯಲ್ಪಟ್ಟ ಜನರು, ದೇವರ ವಾಗ್ದಾನ
ಗಳನ್ನು ಹೊಂದಿಕೊಳ್ಳಲೆಂದು ಕ್ರಿಸ್ತನು ಈ ಹೊಸ ಒಡಂಬಡಿಕೆ
ಯನ್ನು ದೇವರಿಂದ ತಂದನು. ದೇವರ ಜನರು ಅವುಗಳನ್ನು
ಶಾಶ್ವತವಾಗಿ ಹೊಂದಿಕೊಳ್ಳಲು ಸಾಧ್ಯ. ಏಕೆಂದರೆ ಮೊದಲನೆ
ಒಡಂಬಡಿಕೆಯ ಕಾಲದಲ್ಲಿ ಮಾಡಿದ ಪಾಪಗಳಿಂದ ಜನರನ್ನು
ಬಿಡುಗಡೆಗೊಳಿಸುವುದಕ್ಕಾಗಿ ಕ್ರಿಸ್ತನು ಮರಣ ಹೊಂದಿದನು.

16ಒಬ್ಬನು ಸಾಯುವ ಮೊದಲೇ ಉಯಿಲನ್ನು* ಬರೆದಿಡು
ತ್ತಾನೆ. ಆದರೆ ಸತ್ತಿರುವಾತನೇ ಆ ಉಯಿಲನ್ನು ಬರೆದವನೆಂದು
ಜನರು ಸಾಧಿಸಿ ತೋರಿಸಬೇಕು. 17ಅದನ್ನು ಬರೆದವನು ಇನ್ನೂ
ಬದುಕಿದ್ದರೆ ಅದಕ್ಕೆ ಬೆಲೆಯೇನೂ ಇಲ್ಲ. ಅದನ್ನು ಬರೆದಾತನು
ಸತ್ತನಂತರ ಅದು ಉಪಯುಕ್ತವಾಗಿರುತ್ತದೆ. 18ದೇವರು ತನ್ನ
ಜನರೊಂದಿಗೆ ಮಾಡಿಕೊಂಡ ಮೊದಲನೆ ಒಡಂಬಡಿಕೆ ಇದಕ್ಕೆ
ಹೋಲಿಕೆಯಾಗಿದೆ. ಮೊದಲನೆ ಒಡಂಬಡಿಕೆ ಉಪಯುಕ್ತಕ್ಕೆ
ಬರಲು ರಕ್ತಾರ್ಪಣವಾಗಬೇಕಿತ್ತು. 19ಮೊದಲನೆಯದಾಗಿ,
ಮೋಶೆಯು ಧರ್ಮಶಾಸ್ತ್ರದ ಪ್ರತಿಯೊಂದು ಆಜ್ಞೆಯನ್ನೂ
ಜನರಿಗೆಲ್ಲ ತಿಳಿಸಿದನು. ನಂತರ ಅವನು ಕರುಗಳ ರಕ್ತವನ್ನು
ತೆಗೆದುಕೊಂಡು, ಅದನ್ನು ನೀರಿನೊಂದಿಗೆ ಬೆರೆಸಿದನು. ಬಳಿಕ
ನೀರು ಮತ್ತು ರಕ್ತವನ್ನು ಧರ್ಮಶಾಸ್ತ್ರದ ಮೇಲೆ ಮತ್ತು
ಜನರೆಲ್ಲರ ಮೇಲೆ ಚಿಮುಕಿಸಲು ಕೆಂಪು ಉಣ್ಣೆಯನ್ನೂ
ಹಿಸ್ಸೋಪ್ ಗಿಡದ* ಕವಲನ್ನು ಉಪಯೋಗಿಸಿದನು. 20ಚಿಮು
ಕಿಸುವಾಗ, ‘‘ನೀವು ಅನುಸರಿಸಬೇಕೆಂದು ದೇವರು ಆಜ್ಞಾಪಿಸಿದ
ಒಡಂಬಡಿಕೆಯನ್ನು ಈ ರಕ್ತ ದೃಢಪಡಿಸುತ್ತದೆ’’* ಎಂದು
ಹೇಳಿದನು. 21ಅದೇ ರೀತಿ, ಮೋಶೆಯು ರಕ್ತವನ್ನು ಗುಡಾರದ
ಮೇಲೆಯೂ ಆರಾಧನೆಯಲ್ಲಿ ಬಳಸುವ ಎಲ್ಲಾ ವಸ್ತುಗಳ
ಮೇಲೆಯೂ ಚಿಮುಕಿಸಿದನು. 22ಬಹುಮಟ್ಟಿಗೆ ಪ್ರತಿಯೊಂದೂ
ರಕ್ತದಿಂದ ಪರಿಶುದ್ಧವಾಗಬೇಕೆಂದು ಧರ್ಮಶಾಸ್ತ್ರವು ಹೇಳು
ತ್ತದೆ. ರಕ್ತವಿಲ್ಲದೆ ಪಾಪಗಳನ್ನು ಕ್ಷಮಿಸಲು ಸಾಧ್ಯವಿಲ್ಲ.

## ಕ್ರಿಸ್ತನ ಯಜ್ಞವು ಪಾಪಗಳನ್ನು ದೂರತಳ್ಳಿತು

23ಈ ವಸ್ತುಗಳು ಪರಲೋಕದಲ್ಲಿರುವ ವಸ್ತುಗಳ ಪ್ರತಿರೂಪ
ಗಳಾಗಿವೆ. ಇವುಗಳನ್ನು ಪ್ರಾಣಿಗಳ ಯಜ್ಞಗಳಿಂದ ಪರಿಶುದ್ಧ
ಗೊಳಿಸಬೇಕಾಗಿದೆ. ಆದರೆ ಪರಲೋಕದಲ್ಲಿರುವ ನಿಜರೂಪ
ಗಳಿಗಾಗಿ ಉತ್ತಮವಾದ ಯಜ್ಞಗಳನ್ನು ಅರ್ಪಿಸಬೇಕಾಗಿದೆ.
24ಕ್ರಿಸ್ತನು ಮಹಾ ಪವಿತ್ರಸ್ಥಳದೊಳಕ್ಕೆ ಹೋದನು. ಆದರೆ
ಆತನು ಮಾನವ ನಿರ್ಮಿತವಾದ ಮಹಾಪವಿತ್ರಸ್ಥಳಕ್ಕೆ ಹೋಗ
ಲಿಲ್ಲ. ಈ ಮಹಾಪವಿತ್ರಸ್ಥಳವು ನಿಜವಾದದ್ದರ ಪ್ರತಿರೂಪ
ಮಾತ್ರವಾಗಿದೆ. ಆತನು ಪರಲೋಕಕ್ಕೆ ಹೋದನು; ನಮಗೆ
ಸಹಾಯಮಾಡುವುದಕ್ಕೋಸ್ಕರ ಈಗ ದೇವರ ಸನ್ನಿಧಿಯಲ್ಲಿ
ದ್ದಾನೆ. 25ಪ್ರಧಾನ ಯಾಜಕನು ವರ್ಷಕ್ಕೊಮ್ಮೆ ಮಹಾ ಪವಿತ್ರ
ಸ್ಥಳಕ್ಕೆ ಪ್ರವೇಶಿಸುವಾಗ ಅರ್ಪಿಸುವುದಕ್ಕಾಗಿ ಪಶುರಕ್ತವನ್ನು
ತನ್ನೊಡನೆ ತೆಗೆದುಕೊಂಡು ಹೋಗುತ್ತಿದ್ದನು. ಆದರೆ ಅವನು
ತನ್ನ ಸ್ವಂತ ರಕ್ತವನ್ನು ಅರ್ಪಿಸುತ್ತಿರಲಿಲ್ಲ. ಕ್ರಿಸ್ತನು ಪರಲೋಕಕ್ಕೆ
ಹೋದದ್ದು, ಪ್ರಧಾನಯಾಜಕನು ಮತ್ತೆ ಮತ್ತೆ ರಕ್ತವನ್ನು
ಅರ್ಪಿಸಿದಂತೆ ತನ್ನನ್ನು ಮತ್ತೆ ಮತ್ತೆ ಅರ್ಪಿಸಿಕೊಳ್ಳುವುದ
ಕ್ಕಾಗಿಯಲ್ಲ. 26ಕ್ರಿಸ್ತನು ಅನೇಕ ಸಲ ತನ್ನನ್ನು ಅರ್ಪಿಸಿ

---

**ಉಯಿಲು** ಒಬ್ಬ ವ್ಯಕ್ತಿಯು ಸತ್ತಮೇಲೆ, ತನ್ನ ವಸ್ತುಗಳು ಯಾರಿಗೆ ಸೇರಬೇಕೆಂದು ಬರೆದಿಡುವ ಒಂದು ಪತ್ರ. ಅದನ್ನು ‘ಮರಣ ಶಾಸನ’ವೆಂದೂ ಕರೆಯುವರು.

**ಹಿಸ್ಸೋಪಿನ ಗಿಡ** ಒಂದು ಬಗೆಯ ಸಸ್ಯ.

**ನೀವು ... ದೃಢಪಡಿಸುತ್ತದೆ** ವಿಮೋಚನ. 24:8.

ಕೊಂಡಿದ್ದರೆ, ಈ ಲೋಕವು ಸೃಷ್ಟಿಯಾದಂದಿನಿಂದ ಆತನು
ಅನೇಕ ಸಲ ಸಂಕಟವನ್ನು ಅನುಭವಿಸಬೇಕಾಗುತ್ತಿತ್ತು. ಆದರೆ
ಕ್ರಿಸ್ತನು ಯುಗಾಂತ್ಯದಲ್ಲಿ ಪಾಪ ನಿವಾರಣೆ ಮಾಡುವುದಕ್ಕಾಗಿ
ಬಂದು ಒಂದೇ ಸಲ ತನ್ನನ್ನು ಅರ್ಪಿಸಿಕೊಂಡನು. [27]ಪ್ರತಿ
ಯೊಬ್ಬರೂ ಒಂದೇ ಸಾರಿ ಸಾಯುವರು. ಅನಂತರ ಅವರಿಗೆ
ನ್ಯಾಯತೀರ್ಪಾಗುವುದು. [28]ಅದರಂತೆಯೇ ಕ್ರಿಸ್ತನು ಅನೇಕ
ಜನರ ಪಾಪಗಳನ್ನು ತೆಗೆದು ಹಾಕಲು ಒಂದು ಸಲ ಮಾತ್ರ ತನ್ನನ್ನು
ಯಜ್ಞವನ್ನಾಗಿ ಅರ್ಪಿಸಿಕೊಂಡನು. ಕ್ರಿಸ್ತನು ಎರಡನೆ ಸಲ
ಪ್ರತ್ಯಕ್ಷನಾಗುವುದು ಜನರ ಪಾಪ ನಿವಾರಣೆಗೋಸ್ಕರವಲ್ಲ.
ತನಗಾಗಿ ಕಾಯುತ್ತಿರುವ ಜನರನ್ನು ಬಿಡುಗಡೆ ಮಾಡುವುದ
ಕ್ಕಾಗಿಯಷ್ಟೇ.

## ಕ್ರಿಸ್ತನ ಯಜ್ಞವು ನಮ್ಮನ್ನು ನಿಷ್ಕಳಂಕರನ್ನಾಗಿ ಮಾಡುವುದು

10 ದರ್ಮಶಾಸ್ತ್ರವು ಮುಂದೆ ಬರುವ ಉತ್ತಮ ಸಂಗತಿಗಳ
ಅಸ್ಪಷ್ಟ ಚಿತ್ರಣವಾಗಿದೆ. ಅದು ನಿಜವಾದ ಸಂಗತಿಗಳ
ಸ್ಪಷ್ಟ ಚಿತ್ರಣವಲ್ಲ. ಪ್ರತಿ ವರ್ಷವೂ ಒಂದೇ ರೀತಿಯ ಯಜ್ಞ
ಗಳನ್ನು ಅರ್ಪಿಸಬೇಕೆಂದು ಅದು ಜನರಿಗೆ ತಿಳಿಸಿತು ದೇವರನ್ನು
ಆರಾಧಿಸಲು ಬರುವ ಜನರು ಅದೇ ರೀತಿಯ ಯಜ್ಞಗಳನ್ನು
ಅರ್ಪಿಸುತ್ತಿದ್ದರು. ಆದರೆ ಆ ಜನರನ್ನು ಧರ್ಮಶಾಸ್ತ್ರವು
ಎಂದಿಗೂ ನಿಷ್ಕಳಂಕರನ್ನಾಗಿ ಮಾಡಲಿಲ್ಲ. [2]ಅದು ಜನರನ್ನು
ನಿಷ್ಕಳಂಕರನ್ನಾಗಿ ಮಾಡಿದ್ದರೆ, ಆ ಯಜ್ಞಗಳು ಈಗಾಗಲೇ
ನಿಂತುಹೋಗುತ್ತಿದ್ದವು. ಆ ಜನರು ಆಗಲೇ ತಮ್ಮ ಪಾಪಗಳಿಂದ
ಬಿಡುಗಡೆ ಹೊಂದಿ ಪರಿಶುದ್ಧರಾಗುತ್ತಿದ್ದರು. ತಾವು ಪಾಪಿ
ಗಳೆಂಬ ಅರಿವು ಅವರಿಗಿರುತ್ತಿರಲಿಲ್ಲ. [3]ಆ ಜನರು ಪ್ರತಿವರ್ಷ
ಅರ್ಪಿಸುತ್ತಿದ್ದ ಯಜ್ಞಗಳು ಅವರ ಪಾಪಗಳನ್ನು ನೆನಪಿಗೆ
ತರುತ್ತಿದ್ದವು. [4]ಏಕೆಂದರೆ ಅವರ ಪಾಪಗಳನ್ನು ತೆಗೆದು ಹಾಕಲು
ಹೋರಿಗಳ ಮತ್ತು ಹೋತಗಳ ರಕ್ತಕ್ಕೆ ಸಾಧ್ಯವಿರಲಿಲ್ಲ.
[5]ಕ್ರಿಸ್ತನು ಈ ಲೋಕದಲ್ಲಿ ಪ್ರತ್ಯಕ್ಷನಾದಾಗ ಹೇಳಿ
ದ್ದೇನಂದರೆ:

‘‘ದೇವರೇ ನಿನಗೆ ಯಜ್ಞನೈವೇದ್ಯಗಳು ಬೇಕಾಗಿಲ್ಲ.
ಆದರೆ ನೀನು ನನಗಾಗಿ ಒಂದು ದೇಹವನ್ನು
ಸಿದ್ಧಮಾಡಿಕೊಟ್ಟಿರುವೆ.
6 ನೀನು ಸರ್ವಾಂಗ ಹೋಮಗಳಲ್ಲಿಯೂ
ಸಂತೋಷಪಡಲಿಲ್ಲ. ನೀನು ಪಾಪಪರಿಹಾರಕ
ಯಜ್ಞಗಳಲ್ಲಿಯೂ ಸಂತೋಷಪಡಲಿಲ್ಲ.
7 ಆಗ ನಾನು, ‘ದೇವರೆ, ನಾನು ಇಲ್ಲಿದ್ದೇನೆ. ಧರ್ಮ
ಶಾಸ್ತ್ರದಲ್ಲಿ ನನ್ನ ಬಗ್ಗೆ ಬರೆದಿರುವಂತೆಯೇ ನಿನ್ನ
ಚಿತ್ತಕ್ಕನುಸಾರವಾಗಿ ಮಾಡಲು ನಾನು ಬಂದಿ
ದ್ದೇನೆ’ ಎಂದು ಹೇಳಿದೆ.’’

*ಕೀರ್ತನೆ 40:6-8*

[8]ಈ ಪವಿತ್ರ ಗ್ರಂಥದಲ್ಲಿ ಕ್ರಿಸ್ತನು ಮೊದಲನೆಯದಾಗಿ
ಹೇಳಿದ್ದೇನಂದರೆ: ‘‘ನಿನಗೆ ಯಜ್ಞ ನೈವೇದ್ಯಗಳು ಬೇಕಾಗಿಲ್ಲ.
ನೀನು ಸರ್ವಾಂಗಹೋಮಗಳಲ್ಲಿಯೂ ಸಂತೋಷಪಡಲಿಲ್ಲ.
ನೀನು ಪಾಪಪರಿಹಾರಕ ಯಜ್ಞಗಳಲ್ಲಿಯೂ ಸಂತೋಷ
ಪಡಲಿಲ್ಲ.’’ (ಇವುಗಳೆಲ್ಲ ಧರ್ಮಶಾಸ್ತ್ರವು ಆಜ್ಞಾಪಿಸುವ
ಯಜ್ಞಗಳು.) [9]ನಂತರ ಕ್ರಿಸ್ತನು ಹೇಳಿದ್ದೇನೆಂದರೆ, ‘‘ದೇವರೇ,
ನಾನು ಇಲ್ಲಿದ್ದೇನೆ. ನಿನ್ನ ಚಿತ್ತಕ್ಕನುಸಾರವಾಗಿ ಮಾಡಲು ನಾನು
ಬಂದಿದ್ದೇನೆ.’’* ಆದುದರಿಂದ ದೇವರು ಯಜ್ಞಗಳ ಮೊದಲನೆ
ವ್ಯವಸ್ಥೆಯನ್ನು ಕೊನೆಗೊಳಿಸಿ, ತನ್ನ ಹೊಸ ಮಾರ್ಗವನ್ನು
ಆರಂಭಿಸಿದ್ದಾನೆ. [10]ದೇವರ ಇಷ್ಟಕ್ಕನುಸಾರವಾದ ಕಾರ್ಯ
ಗಳನ್ನು ಯೇಸು ಕ್ರಿಸ್ತನು ಮಾಡಿದನು. ಆ ಕಾರಣದಿಂದಲೇ,
ಯಜ್ಞವಾಗಿ ಅರ್ಪಿತವಾದ ಆತನ ದೇಹದ ಮೂಲಕ ನಾವು
ಪರಿಶುದ್ಧರಾದೆವು. ಆತನು ಶಾಶ್ವತವಾದ ಯಜ್ಞವನ್ನು ಒಂದೇ
ಸಲ ಅರ್ಪಿಸಿದನು.
[11]ಪ್ರತಿದಿನವೂ ಯಾಜಕರು ನಿಂತುಕೊಂಡು ತಮ್ಮ
ಧಾರ್ಮಿಕ ಸೇವೆಯನ್ನು ಮಾಡುತ್ತಾರೆ. ಅವರು ಮತ್ತೆ ಮತ್ತೆ
ಅದೇ ಯಜ್ಞಗಳನ್ನು ಅರ್ಪಿಸುತ್ತಾರೆ. ಆದರೆ ಅವರ ಪಾಪಗಳನ್ನು
ತೆಗೆದುಹಾಕಲು ಯಜ್ಞಗಳಿಗೆ ಎಂದಿಗೂ ಸಾಧ್ಯವಿಲ್ಲ. [12]ಆದರೆ
ಕ್ರಿಸ್ತನು ಪಾಪಗಳಿಗಾಗಿ ಶಾಶ್ವತವಾದ ಒಂದೇ ಯಜ್ಞವನ್ನು
ಅರ್ಪಿಸಿದನು. ನಂತರ ಆತನು ದೇವರ ಬಲಗಡೆಯಲ್ಲಿ ಕುಳಿತು
ಕೊಂಡನು. [13]ಶತ್ರುಗಳನ್ನು ತನ್ನ ಪಾದಪೀಠವನ್ನಾಗಿ ಮಾಡುವ
ತನಕ ಕ್ರಿಸ್ತನು ಕಾಯುತ್ತಿದ್ದಾನೆ. [14]ಒಂದೇ ಯಜ್ಞದ ಮೂಲಕ
ಆತನು ತನ್ನ ಜನರನ್ನು ಎಂದೆಂದಿಗೂ ನಿಷ್ಕಳಂಕರನ್ನಾಗಿ ಮಾಡಿ
ದನು. ಪರಿಶುದ್ಧರಾಗಿ ಮಾಡಲ್ಪಡುತ್ತಿರುವ ಜನರೇ ಇವರು.
[15]ಪವಿತ್ರಾತ್ಮನು ನಮಗೆ ಇದರ ಬಗ್ಗೆ ತಿಳಿಸಿದ್ದಾನೆ.
ಮೊದಲನೆಯದಾಗಿ ಆತನು ಹೇಳುವುದೇನಂದರೆ:

16 ‘‘ಮುಂದಿನ ಕಾಲದಲ್ಲಿ ನಾನು ನನ್ನ ಜನರೊಂದಿಗೆ
ಮಾಡಿಕೊಳ್ಳುವ ಒಡಂಬಡಿಕೆಯು ಹೀಗಿದೆ
ಎಂದು ಪ್ರಭುವು ಹೇಳುತ್ತಾನೆ; ನಾನು ನನ್ನ
ಆಜ್ಞೆಗಳನ್ನು ಅವರ ಹೃದಯದಲ್ಲಿ ಇಡುವೆನು;
ಅವರ ಮನಸ್ಸಿನ ಮೇಲೆ ಬರೆಯುವೆನು.’’

*ಯೆರೆಮೀಯ 31:33*

[17]ನಂತರ ಆತನು ಹೇಳುವುದೇನಂದರೆ:

‘‘ನಾನು ಅವರ ಪಾಪಗಳನ್ನು ಮತ್ತು ಅವರ
ಕೆಟ್ಟಕಾರ್ಯಗಳನ್ನು ಕ್ಷಮಿಸುತ್ತೇನೆ. ಅವುಗಳನ್ನು
ಮತ್ತೆಂದಿಗೂ ನೆನಪು ಮಾಡಿಕೊಳ್ಳುವುದಿಲ್ಲ.’’

*ಯೆರೆಮೀಯ 31;34*

[18]ಈ ಪಾಪಗಳೆಲ್ಲಾ ಕ್ಷಮಿಸಲ್ಪಟ್ಟ ಮೇಲೆ, ಅವುಗಳಿಗಾಗಿ ಮತ್ತೆ
ಯಜ್ಞಗಳನ್ನು ಅರ್ಪಿಸುವುದು ಅಗತ್ಯವಿಲ್ಲ.

## ಸಮೀಪಕ್ಕೆ ಬನ್ನಿರಿ

[19-20]ಸಹೋದರ ಸಹೋದರಿಯರೇ, ನಾವು ಮಹಾ ಪವಿತ್ರ
ಸ್ಥಳವನ್ನು ಪ್ರವೇಶಿಸಲು ಸಂಪೂರ್ಣವಾಗಿ ಸ್ವತಂತ್ರರಾಗಿದ್ದೇವೆ.
ಯೇಸು ನಮಗಾಗಿ ತೆರೆದಿರುವ ಹೊಸ ಮಾರ್ಗದ ಮೂಲಕ
ನಾವು ಭಯವಿಲ್ಲದೆ ಪ್ರವೇಶಿಸಬಹುದು. ಅದು ಜೀವವುಳ್ಳ
ಮಾರ್ಗ. ಕ್ರಿಸ್ತನ ದೇಹವೆಂಬ ತೆರೆಯ ಮೂಲಕ ಈ ಹೊಸ

---

**ನಿನಗೆ … ಬಂದಿದ್ದೇನೆ.** ಕೀರ್ತನೆ 40:6-7.

ಮಾರ್ಗವು ನಮ್ಮನ್ನು ಮುಂದಕ್ಕೆ ಕೊಂಡೊಯ್ಯುವುದು.
21ದೇವರ ಮನೆಯನ್ನು ಆಳಲು ನಮಗೊಬ್ಬ ಶ್ರೇಷ್ಠ ಯಾಜಕ
ನಿರುವನು. 22ನಾವು ತೊಳೆಯಲ್ಪಟ್ಟವರಾಗಿದ್ದು ಕೆಟ್ಟ ಮನಸ್ಸಾಕ್ಷಿ
ಯಿಂದ ಬಿಡುಗಡೆ ಹೊಂದಿದ್ದೇವೆ. ನಮ್ಮ ದೇಹಗಳನ್ನು ಶುದ್ಧ
ವಾದ ನೀರಿನಿಂದ ತೊಳೆಯಲಾಗಿದೆ. ಆದ್ದರಿಂದ ಪೂರ್ಣ
ನಂಬಿಕೆಯಿಂದಲೂ ಶುದ್ಧವಾದ ಹೃದಯದಿಂದಲೂ ದೇವರ
ಬಳಿಗೆ ಬರೋಣ. 23ನಮ್ಮಲ್ಲಿರುವ ನಿರೀಕ್ಷೆಯನ್ನು ದೃಢವಾಗಿ
ಕಾಯ್ದುಕೊಂಡು ಅದರ ಬಗ್ಗೆ ಜನರಿಗೆ ತಿಳಿಸುವುದರಲ್ಲಿ ದೃಢ
ವಾಗಿರೋಣ. ದೇವರು ತನ್ನ ವಾಗ್ದಾನವನ್ನು ಈಡೇರಿಸುತ್ತಾನೆ
ಎಂಬ ಭರವಸೆ ನಮ್ಮಲ್ಲಿರಬೇಕು.

### ಒಬ್ಬರಿಗೊಬ್ಬರು ಸಹಾಯಮಾಡಿ ಶಕ್ತಿಯುಳ್ಳವರಾಗಿರಿ

24ಒಬ್ಬರಿಗೊಬ್ಬರು ಹಿತಚಿಂತಕರಾಗಿರೋಣ. ಆಗ ಒಬ್ಬರಿ
ಗೊಬ್ಬರು ಪ್ರೀತಿಯನ್ನು ತೋರ್ಪಡಿಸುವುದಕ್ಕೂ ಒಳ್ಳೆಯ
ಕಾರ್ಯಗಳನ್ನು ಮಾಡುವುದಕ್ಕೂ ಪ್ರೋತ್ಸಾಹಿಸಲು ಸಾಧ್ಯ
ವಾಗುತ್ತದೆ. 25ನಾವು ಸಭೆಯಾಗಿ ಸೇರಿ ಬರುವುದನ್ನು
ಬಿಡಬಾರದು. ಕೆಲವರು ಸಭೆಗೆ ಬರುತ್ತಿಲ್ಲ. ನಾವು ಒಟ್ಟಾಗಿ
ಸೇರಿಬಂದು ಒಬ್ಬರನ್ನೊಬ್ಬರು ಬಲಪಡಿಸಬೇಕು. ಯೇಸುವು
ಪ್ರತ್ಯಕ್ಷನಾಗುವ ದಿನ* ಸಮೀಪವಾಗುತ್ತಿರುವುದರಿಂದ ನೀವು
ಇದನ್ನು ಮತ್ತಷ್ಟು ಹೆಚ್ಚಾಗಿ ಮಾಡಬೇಕು.

### ಕ್ರಿಸ್ತನಿಂದ ದೂರ ಸರಿಯದಿರಿ

26ನಾವು ಸತ್ಯವನ್ನು ತಿಳಿದುಕೊಂಡ ಮೇಲೆಯೂ ಪಾಪ
ಗಳನ್ನು ಮಾಡುತ್ತಲೇ ಇದ್ದರೆ, ನಮ್ಮ ಪಾಗಳನ್ನು ಯಾವ
ಯಜ್ಞವೂ ಪರಿಹರಿಸುವುದಿಲ್ಲ. 27ನಾವು ಪಾಪಗಳಲ್ಲಿಯೇ
ಮುಂದುವರಿದರೆ, ನ್ಯಾಯತೀರ್ಪಿನ ಭಯದಲ್ಲಿ ಮತ್ತು ದೇವರ
ವಿರುದ್ಧವಾಗಿ ಜೀವಿಸುವವರನ್ನು ದಹಿಸುವ ಭಯಂಕರ
ಬೆಂಕಿಯ ಭಯದಲ್ಲಿ ಜೀವಿಸಬೇಕಾಗುತ್ತದೆ. 28ಮೋಶೆಯ
ನಿಯಮಗಳಿಗೆ ಅವಿಧೇಯನಾದ ವ್ಯಕ್ತಿಯು ಇಬ್ಬರು ಅಥವಾ
ಮೂವರು ಸಾಕ್ಷಿಗಳಿಂದ ತಪ್ಪಿತಸ್ಥನೆಂದು ನಿರ್ಧರಿಸಲ್ಪಟ್ಟರೆ,
ಅವನಿಗೆ ಕ್ಷಮೆ ದೊರೆಯುತ್ತಿರಲಿಲ್ಲ. ಅವನನ್ನು
ಕೊಂದುಹಾಕುತ್ತಿದ್ದರು. 29ಹೀಗಿರಲು ದೇವರ ಮಗನನ್ನು
ದ್ವೇಷಿಸುವ ಒಬ್ಬ ವ್ಯಕ್ತಿಯನ್ನು ಏನು ಮಾಡಬೇಕೆಂದು ನೀವು
ಆಲೋಚಿಸುವಿರಿ? ನಿಜವಾಗಿಯೂ ಆ ವ್ಯಕ್ತಿಗೆ ಇದಕ್ಕಿಂತಲೂ
ತೀವ್ರವಾದ ದಂಡನೆಯನ್ನು ವಿಧಿಸಬೇಕಲ್ಲವೆ. ಹೌದು, ಹೊಸ
ಒಪ್ಪಂದದ ರಕ್ತಕ್ಕೆ ಗೌರವವನ್ನು ತೋರದಿದ್ದ ಆ ವ್ಯಕ್ತಿಗೆ
ಕ್ರೂರವಾದ ದಂಡನೆಯಾಗಬೇಕು. ಆ ರಕ್ತವು ಅವನನ್ನು
ಪವಿತ್ರನನ್ನಾಗಿಸಿತು. ದೇವರಾತ್ಮನ ಕೃಪೆಗೆ ಗೌರವವನ್ನು
ತೋರದಿದ್ದ ಆ ವ್ಯಕ್ತಿಗೆ ತೀವ್ರವಾದ ದಂಡನೆಯಾಗಬೇಕು.
30‘‘ಜನರು ಮಾಡುವ ತಪ್ಪು ಕಾರ್ಯಗಳಿಗಾಗಿ ನಾನು ಅವರನ್ನು
ದಂಡಿಸುತ್ತೇನೆ’’ ನಾನು ಮುಯ್ಯಿಗೆ ಮುಯ್ಯಿ ತೀರಿಸುತ್ತೇನೆ.’’*
ಎಂದು ದೇವರು ಹೇಳಿದ್ದು ನಮಗೆ ತಿಳಿದೇ ಇದೆ. 31‘‘ಪ್ರಭುವು
ತನ್ನ ಜನರಿಗೆ ನ್ಯಾಯತೀರ್ಪು ನೀಡುತ್ತಾನೆ’’ ಎಂದು ಸಹ
ದೇವರು ಹೇಳಿದ್ದಾನೆ. ಜೀವಸ್ವರೂಪನಾದ ದೇವರ ಹಿಡಿತಕ್ಕೆ
ಸಿಕ್ಕಿಬೀಳುವುದು ಪಾಪಿಗೆ ಭಯಂಕರವಾಗಿದೆ.

### ನಿಮ್ಮಲ್ಲಿರುವ ಸಂತೋಷ ಮತ್ತು ಧೈರ್ಯಗಳನ್ನು ಬಿಡಬೇಡಿ

32ನೀವು ಸತ್ಯವನ್ನು ತಿಳಿದುಕೊಂಡ ಆ ದಿನಗಳನ್ನು ನೆನಪು
ಮಾಡಿಕೊಳ್ಳಿ. ನೀವು ಅನೇಕ ಸಂಕಟಗಳಲ್ಲಿ ಹೋರಾಟ
ಮಾಡಿದರೂ, ಧೃತಿಗೆಡದೆ ಮುಂದುವರಿದಿರಿ. 33ಕೆಲವು
ಸಂದರ್ಭಗಳಲ್ಲಿ ಜನರು ನಿಮಗೆ ದ್ವೇಷಮಯ ಸಂಗತಿಗಳನ್ನು
ಹೇಳಿದರು ಹಾಗೂ ಅನೇಕ ಜನರ ಮುಂದೆ ನಿಮ್ಮನ್ನು
ಹಿಂಸಿಸಿದರು. ಅದೇ ರೀತಿಯ ಹಿಂಸೆಗೆ ಗುರಿಯಾಗಿದ್ದ ಜನರಿಗೆ
ಕೆಲವು ಸಂದರ್ಭಗಳಲ್ಲಿ ಸಹಾಯ ಮಾಡಿದಿರಿ. 34ಹೌದು,
ಸೆರೆಯಲ್ಲಿರುವ ಜನರಿಗೆ ಸಹಾಯ ಮಾಡಿದಿರಿ ಮತ್ತು ಅವರ
ಸಂಕಟಗಳಲ್ಲಿ ಪಾಲ್ಗೊಂಡಿರಿ. ನಿಮ್ಮ ಸ್ವತ್ತುಗಳನ್ನೆಲ್ಲ ನಿಮ್ಮಿಂದ
ಕಿತ್ತುಕೊಂಡು ಹೋದಾಗಲೂ ಸಂತೋಷದಿಂದಲೇ ಇದ್ದೀರಿ.
ಅದಕ್ಕಿಂತಲೂ ಉತ್ತಮವಾದದ್ದೂ ಶಾಶ್ವತವಾದದ್ದೂ ನಿಮಗೆ
ದೊರೆತಿದೆ ಎಂದು ನಿಮಗೆ ತಿಳಿದಿದ್ದ ಕಾರಣ ನೀವು
ಸಂತೋಷವಾಗಿದ್ದಿರಿ.
35ಹಿಂದೆ ಹೊಂದಿದ್ದ ಧೈರ್ಯವನ್ನು ಬಿಟ್ಟು ಬಿಡಬೇಡಿ. ನಿಮ್ಮ
ಸಾಹಸಕ್ಕೆ ತಕ್ಕ ಪ್ರತಿಫಲವು ಸಿಗುತ್ತದೆ. 36ತಾಳ್ಮೆಯಿಂದಿರಿ, ದೇವರ
ಇಷ್ಟದಂತೆ ನೀವು ಮಾಡಿದರೆ, ಆತನ ವಾಗ್ದಾನದಂತೆ ನಿಮಗೆ
ಪ್ರತಿಫಲವು ಸಿಕ್ಕೇ ಸಿಗುತ್ತದೆ. 37ಸ್ವಲ್ಪ ಕಾಲದಲ್ಲಿಯೆ,

> ‘‘ಬರುವಾತನು ಬರುತ್ತಾನೆ. ಆತನು ತಡ
> ಮಾಡುವುದಿಲ್ಲ.
> 38 ನೀತಿವಂತನು ನಂಬಿಕೆಯಿಂದಲೇ ಜೀವವನ್ನು
> ಹೊಂದಿಕೊಳ್ಳುವನು. ಆದರೆ ಅವನು ಭಯ
> ದಿಂದ ಹಿಂಜರಿದರೆ ನಾನು ಅವನಲ್ಲಿ ಸಂತೋಷ
> ಪಡುವುದಿಲ್ಲ.’’
>
> *ಯೆರೆಮೀಯ 2:3-4*

39ಆದರೆ ನಾವು ಹಿಂಜರಿಯುವ ಜನರಲ್ಲ, ನಾಶವಾಗುವ
ಜನರೂ ಅಲ್ಲ. ನಾವು ನಂಬಿಕೆಯುಳ್ಳವರಾಗಿದ್ದೇವೆ ಮತ್ತು
ರಕ್ಷಣೆ ಹೊಂದಿದವರಾಗಿದ್ದೇವೆ.

### ನಂಬಿಕೆ

11 ನಂಬಿಕೆ ಎಂದರೆ ನಾವು ನಿರೀಕ್ಷೆಯಿಂದಿರುವ
ಸಂಗತಿಗಳಲ್ಲಿ ಭರವಸದಿಂದಿರುವುದೂ ನಮ್ಮ ಕಣ್ಣಿಗೆ
ಕಾಣದಿರುವುದನ್ನು ನಿಜವೆಂದು ತಿಳಿದುಕೊಳ್ಳುವುದೂ ಆಗಿದೆ.
2ಬಹಳ ಹಿಂದಿನ ಕಾಲದಲ್ಲಿ ಜೀವಿಸಿದ್ದ ಜನರಲ್ಲಿ ಈ ರೀತಿಯ
ನಂಬಿಕೆಯಿದ್ದುದರಿಂದ ದೇವರು ಅವರ ವಿಷಯದಲ್ಲಿ
ಸಂತೋಷಪಟ್ಟನು.
3ದೇವರು ತನ್ನ ಆಜ್ಞೆಯಿಂದ ಈ ಲೋಕವನ್ನು ಸೃಷ್ಟಿಸಿದ
ನೆಂಬುದನ್ನು ಅರ್ಥಮಾಡಿಕೊಳ್ಳಲು ನಂಬಿಕೆ ನಮಗೆ ಸಹಾಯ
ಮಾಡುತ್ತದೆ. ಹೇಗೆಂದರೆ ನಮ್ಮ ಕಣ್ಣಿಗೆ ಕಾಣುವಂಥ ವಸ್ತು
ಗಳಿಂದ ಈ ಜಗತ್ತು ಸೃಷ್ಟಿಯಾಗಲಿಲ್ಲ.
4ಕಾಯಿನ ಮತ್ತು ಹೇಬೆಲರಿಬ್ಬರೂ ದೇವರಿಗೆ ಯಜ್ಞಗಳನ್ನು
ಅರ್ಪಿಸಿದರು. ಆದರೆ ಹೇಬೆಲನಲ್ಲಿ ನಂಬಿಕೆಯಿದ್ದುದರಿಂದ

---

**ಯೇಸುವು … ದಿನ** ಇದು ಕ್ರಿಸ್ತನ ಎರಡನೇ ಬರೋಣದ ಸೂಚನೆಯಾಗಿದೆ.

**ಜನರು … ತೀರಿಸುತ್ತೇನೆ** ಕೀರ್ತನೆ 135:14.

ಅವನು ದೇವರಿಗೆ ಉತ್ತಮವಾದ ಯಜ್ಞವನ್ನು ಅರ್ಪಿಸಿದನು.
ಅವನು ಅರ್ಪಿಸಿದ ವಸ್ತುಗಳಿಂದ ತನಗೆ ಸಂತೋಷವಾಯಿತೆಂದು
ದೇವರೇ ಹೇಳಿದನು. ಅವನಲ್ಲಿ ನಂಬಿಕೆಯಿದ್ದುದರಿಂದ
ದೇವರು ಅವನನ್ನು ಒಳ್ಳೆಯ ಮನುಷ್ಯನೆಂದು ಕರೆದನು.
ಹೇಬೆಲನು ಸತ್ತುಹೋದನು, ಆದರೂ ತನ್ನ ನಂಬಿಕೆಯ
ಮೂಲಕ ಇನ್ನೂ ಮಾತನಾಡುತ್ತಿದ್ದಾನೆ.

5 ಹನೋಕನು ಸಾವನ್ನು ಅನುಭವಿಸದೆ ಈ ಲೋಕದಿಂದ
ಮೇಲೋಕಕ್ಕೆ ಒಯ್ಯಲ್ಪಟ್ಟನು. ಪವಿತ್ರ ಗ್ರಂಥವು ಹೇಳುವಂತೆ,
ಅವನು ಒಯ್ಯಲ್ಪಡುವುದಕ್ಕಿಂತ ಮೊದಲು ದೇವರಿಗೆ ನಿಜ
ವಾಗಿಯೂ ಮೆಚ್ಚಿಕೆಯಾಗಿದ್ದನು. ತರುವಾಯ ಜನರಿಗೆ ಅವನು
ಸಿಕ್ಕಲೇ ಇಲ್ಲ. ಅವನ ನಂಬಿಕೆಯ ದೆಸೆಯಿಂದ ದೇವರು
ಅವನನ್ನು ತನ್ನೊಡನಿರಲು ಕೊಂಡೊಯ್ದನು. 6 ನಂಬಿಕೆ
ಯಿಲ್ಲದೆ ದೇವರನ್ನು ಯಾರೂ ಮೆಚ್ಚಿಸಲಾಗುವುದಿಲ್ಲ. ದೇವರ
ಬಳಿಗೆ ಬರುವ ಯಾರೇ ಆಗಲಿ, ದೇವರು ಇದ್ದಾನೆಂತಲೂ
ಆತನನ್ನು ಮನಃಪೂರ್ವಕವಾಗಿ ಹುಡುಕುವ ಜನರಿಗೆ ಆತನು
ಪ್ರತಿಫಲವನ್ನು ಕೊಡುತ್ತಾನೆಂತಲೂ ನಂಬಬೇಕು.

7 ಕಣ್ಣಿಗೆ ಇನ್ನೂ ಕಾಣದಿದ್ದ ಸಂಗತಿಗಳ ಬಗ್ಗೆ ದೇವರು
ನೋಹನನ್ನು ಎಚ್ಚರಿಸಿದನು. ನೋಹನು ದೇವರಲ್ಲಿ ನಂಬಿಕೆ
ಯಿಟ್ಟಿದ್ದನು ಮತ್ತು ಭಕ್ತಿ ಉಳ್ಳವನಾಗಿದ್ದನು. ಆದ್ದರಿಂದ ಅವನು
ತನ್ನ ಕುಟುಂಬ ರಕ್ಷಣೆಗಾಗಿ ದೊಡ್ಡ ನಾವೆಯನ್ನು ಕಟ್ಟಿ, ಈ
ಲೋಕದ ತಪ್ಪನ್ನು ತೋರ್ಪಡಿಸಿದನು. ಹೀಗೆ, ನಂಬಿಕೆಯ
ಮೂಲಕ ನೀತಿವಂತರಾದ ಜನರಲ್ಲಿ ಅವನೂ ಒಬ್ಬನಾದನು.

8 ದೇವರು ತಾನೂ ಕೊಡುತ್ತೇನೆಂದು ವಾಗ್ದಾನ ಮಾಡಿದ್ದ
ಸ್ಥಳಕ್ಕೆ ಪ್ರಯಾಣ ಮಾಡಬೇಕೆಂದು ಅಬ್ರಹಾಮನನ್ನು ಕರೆದನು.
ಆ ಸ್ಥಳವು ಎಲ್ಲಿದೆಯೆಂಬುದು ಅವನಿಗೆ ತಿಳಿದಿರಲಿಲ್ಲ.
ಅಬ್ರಹಾಮನಲ್ಲಿ ನಂಬಿಕೆಯಿದ್ದುದರಿಂದ, ದೇವರಿಗೆ ವಿಧೇಯ
ನಾಗಿ ಪ್ರಯಾಣ ಮಾಡಲಾರಂಭಿಸಿದನು. 9 ದೇವರು ಕೊಡುವು
ದಾಗಿ ವಾಗ್ದಾನ ಮಾಡಿದ್ದ ದೇಶದಲ್ಲಿ ಅವನು ಪ್ರವಾಸಿಗನಂತೆ
ವಾಸಮಾಡಿದ್ದು ನಂಬಿಕೆಯಿಂದಲೇ. ಅದೇ ವಾಗ್ದಾನಕ್ಕೆ ಸಹ
ಭಾಧ್ಯರಾಗಿದ್ದ ಇಸಾಕನೂ ಯಾಕೋಬನೂ ಅವನಂತೆಯೇ
ಡೇರೆಗಳಲ್ಲಿ ವಾಸಿಸಿದರು. 10 ಅಬ್ರಹಾಮನು ಶಾಶ್ವತವಾದ
ಅಡಿಪಾಯಗಳುಳ್ಳ ನಗರಕ್ಕಾಗಿ ಕಾದಿದ್ದನು. ದೇವರೇ ಸಂಕಲ್ಪಿಸಿ,
ನಿರ್ಮಿಸಿದ ನಗರಕ್ಕಾಗಿ ಅವನು ಕಾದಿದ್ದನು.

11 ಅಬ್ರಹಾಮನು ಮಕ್ಕಳನ್ನು ಪಡೆಯಲಾಗದಷ್ಟು ವೃದ್ಧ
ನಾಗಿದ್ದನು. ಸಾರಳು ಮಕ್ಕಳನ್ನು ಪಡೆಯಲು ಸಮರ್ಥ
ಳಾಗಿರಲಿಲ್ಲ. ಆದರೆ ಅಬ್ರಹಾಮನಿಗೆ ದೇವರಲ್ಲಿ ನಂಬಿಕೆಯಿದ್ದು
ದರಿಂದ, ಅವರು ಮಕ್ಕಳನ್ನು ಪಡೆಯಲು ಸಮರ್ಥರಾಗುವಂತೆ
ದೇವರು ಮಾಡಿದನು. 12 ಅವನು ಮೃತಪ್ರಾಯನಾಗಿದ್ದವನಂತೆ
ವೃದ್ಧನಾಗಿದ್ದರೂ ಆಕಾಶದ ನಕ್ಷತ್ರಗಳಂತೆಯೂ ಸಮುದ್ರ
ತೀರದ ಉಸುಬಿನಂತೆಯೂ ಅಸಂಖ್ಯಾತವಾಗಿ ಮಕ್ಕಳು
ಹುಟ್ಟಿದರು.

13 ಈ ಮಹಾ ಪುರುಷರೆಲ್ಲರೂ ತಾವು ಸಾಯುವವರೆಗೂ
ನಂಬಿಕೆಯುಳ್ಳವರಾಗಿದ್ದರು. ದೇವರು ತನ್ನ ಜನರಿಗೆ ವಾಗ್ದಾನ
ಮಾಡಿದ್ದವುಗಳನ್ನು ಆ ಜನರು ಪಡೆಯಲಿಲ್ಲ. ಮುಂದೆ ಬಹು
ಕಾಲದ ನಂತರ ಬರಲಿದ್ದ ಅವುಗಳನ್ನು ನೋಡಿ ಅವರು
ಸಂತೋಷಗೊಂಡರು. ಅವರು ತಾವು ಈ ಲೋಕದಲ್ಲಿ ಪ್ರವಾಸಿ
ಗಳಂತೆ ಮತ್ತು ಅಪರಿಚಿತರಂತೆ ಇದ್ದೇವೆ ಎಂಬುದನ್ನು ಒಪ್ಪಿ
ಕೊಂಡರು. 14 ಅವರು ಹಾಗೆ ಒಪ್ಪಿಕೊಂಡದ್ದರಿಂದ ತಾವು
ಸ್ವದೇಶಕ್ಕಾಗಿ ಕಾದಿರುವುದಾಗಿ ತೋರ್ಪಡಿಸಿಕೊಂಡಂತಾ
ಯಿತು. 15 ಆ ಜನರು ತಾವು ಬಿಟ್ಟುಬಂದ ದೇಶದ ಮೇಲೇ
ನಾದರೂ ಮನಸ್ಸಿಟ್ಟಿದ್ದರೆ, ಅವರು ಮರಳಿ ಹೋಗುತ್ತಿದ್ದರು.
16 ಆದರೆ ಆ ಜನರು ಉತ್ತಮ ದೇಶವಾದ ಪರಲೋಕಕ್ಕಾಗಿ
ಕಾದಿದ್ದರು. ಆದ್ದರಿಂದ ದೇವರು ತನ್ನನ್ನು ಅವರ ದೇವರೆಂದು
ಹೇಳಿಕೊಳ್ಳಲು ನಾಚಿಕೆಪಡದೆ ಅವರಿಗಾಗಿ ಒಂದು ನಗರವನ್ನು
ಸಿದ್ಧಪಡಿಸಿದನು.

17-18 ದೇವರು ಅಬ್ರಹಾಮನ ನಂಬಿಕೆಯನ್ನು ಪರೀಕ್ಷಿ
ಸಿದನು. ಇಸಾಕನನ್ನು ಯಜ್ಞವಾಗಿ ಸಮರ್ಪಿಸೆಂದು ದೇವರು
ಅವನಿಗೆ ಹೇಳಿದನು. ಅಬ್ರಹಾಮನಲ್ಲಿ ನಂಬಿಕೆಯಿದ್ದುದರಿಂದ
ವಿಧೇಯನಾದನು. ದೇವರು ಅವನಿಗೆ, ‘‘ನಿನ್ನ ಸಂತತಿಗಳವರು
ಇಸಾಕನ ಮೂಲಕ ಬರುವರು’’* ಎಂದು ಮೊದಲೇ ವಾಗ್ದಾನ
ಮಾಡಿದ್ದನು. ಆದರೂ ತನ್ನ ಒಬ್ಬನೇ ಮಗನನ್ನು ಅರ್ಪಿಸಲು
ಅವನು ಸಿದ್ಧನಾಗಿದ್ದನು. 19 ದೇವರು ಸತ್ತವರನ್ನು ಜೀವಂತವಾಗಿ
ಎಬ್ಬಿಸಬಲ್ಲನೆಂದು ಅವನು ನಂಬಿದ್ದನು. ಇಸಾಕನನ್ನು ಕೊಲ್ಲ
ದಂತೆ ದೇವರು ಅವನನ್ನು ತಡೆದಾಗ, ಅವನಿಗೆ ನಿಜವಾಗಿಯೂ
ಇಸಾಕನನ್ನು ಸಾವಿನಿಂದ ಮರಳಿ ಪಡೆದಂತಾಯಿತು.

20 ಇಸಾಕನು ಯಾಕೋಬನ ಮತ್ತು ಏಸಾವನ ಭವಿಷ್ಯತ್ತನ್ನು
ಆಶೀರ್ವದಿಸಿದನು. ಇಸಾಕನಲ್ಲಿದ್ದ ನಂಬಿಕೆಯೇ ಇದಕ್ಕೆ
ಕಾರಣ. 21 ಯಾಕೋಬನು ಯೋಸೇಫನ ಮಕ್ಕಳಿಬ್ಬರನ್ನೂ
ತಾನು ಸಾಯುವ ಗಳಿಗೆಯಲ್ಲಿ ಆಶೀರ್ವದಿಸಿದನು. ಅವನು
ಊರುಗೋಲಿನ ಮೇಲೆ ಬಾಗಿಕೊಂಡು ದೇವರನ್ನು ಆರಾಧಿಸು
ತ್ತಿದ್ದನು. ಅವನಲ್ಲಿದ್ದ ನಂಬಿಕೆಯೇ ಇದಕ್ಕೆ ಕಾರಣ.

22 ಯೋಸೇಫನು ಸಾಯುವಗಳಿಗೆಯಲ್ಲಿದ್ದಾಗ, ಇಸ್ರೇಲರು
ಈಜಿಪ್ಟನ್ನು ಬಿಟ್ಟುಹೋಗುವುದರ ಕುರಿತು ಮಾತನಾಡಿದನು;
ತನ್ನ ದೇಹವನ್ನು ಏನು ಮಾಡಬೇಕೆಂಬುದರ ಬಗ್ಗೆಯೂ
ತಿಳಿಸಿದನು. ಅದಕ್ಕೆ ಅವನ ನಂಬಿಕೆಯೇ ಕಾರಣ.

23 ಮೋಶೆಯು ಹುಟ್ಟಿದಾಗ ಅವನ ತಂದೆತಾಯಿಗಳು
ನಂಬಿಕೆಯಿಂದಲೇ ಅವನನ್ನು ಮೂರು ತಿಂಗಳವರೆಗೆ ಅಡಗಿ
ಸಿಟ್ಟರು. ಮಗುವಾಗಿದ್ದ ಮೋಶೆಯ ಸೌಂದರ್ಯವನ್ನು ಅವರು
ಕಂಡದ್ದರಿಂದ ರಾಜನಾದ ಫರೋಹನ ಆಜ್ಞೆಗೂ ಅವಿಧೇಯ
ರಾಗಲು ಹಿಂಜರಿಯಲಿಲ್ಲ.

24 ಮೋಶೆಯು ಬೆಳೆದು ದೊಡ್ಡವನಾದನು. ಅವನು
ಫರೋಹನ ಮಗಳ ಮಗನೆಂದು ಕರೆಸಿಕೊಳ್ಳಲು ಒಪ್ಪಲಿಲ್ಲ.
25 ಅವನು ಪಾಪಗಳಿಂದ ಸಿಗುವ ಸುಖವನ್ನು ಆರಿಸಿಕೊಳ್ಳಲಿಲ್ಲ.
ಆ ಸುಖಗಳು ಬೇಗನೆ ಕೊನೆಗೊಳ್ಳುತ್ತವೆ. ಆದ್ದರಿಂದ ಅವನು
ದೇವಜನರೊಂದಿಗೆ ಕಷ್ಟಪಡುವುದನ್ನೇ ಆರಿಸಿಕೊಂಡನು.
ಅವನಲ್ಲಿದ್ದ ನಂಬಿಕೆಯೇ ಇದಕ್ಕೆ ಕಾರಣ. 26 ಈಜಿಪ್ಟಿನ
ಭಂಡಾರವನ್ನೆಲ್ಲ ಪಡೆಯುವುದಕ್ಕಿಂತ ಕ್ರಿಸ್ತನಿಗಾಗಿ ಸಂಕಟವನ್ನು
ಅನುಭವಿಸುವುದು ಶ್ರೇಯಸ್ಕರವೆಂದು ಅವನು ಭಾವಿಸಿದನು.
ದೇವರು ತನಗೆ ನೀಡುವ ಪ್ರತಿಫಲಕ್ಕಾಗಿ ಅವನು ಕಾಯು
ತ್ತಿದ್ದನು. 27 ಅವನು ಈಜಿಪ್ಟನ್ನು ಬಿಟ್ಟುಹೋದದ್ದು ನಂಬಿಕೆ
ಯಿಂದಲೇ. ಫರೋಹನ ಸಿಟ್ಟಿಗೆ ಅವನು ಭಯಪಡಲಿಲ್ಲ.
ಯಾರಿಗೂ ಕಾಣದ ದೇವರು ತನಗೆ ಕಾಣುತ್ತಿರುವನೋ

---

**ನಿನ್ನ … ಬರುವವರು** ಆದಿಕಾಂಡ 21:12.

ಎಂಬಂತೆ ಅವನು ದೃಢ ಚಿತ್ತನಾಗಿದ್ದನು; 28ಪಸ್ಕಹಬ್ಬನ್ನು ಆಚರಿಸಿ, ಬಾಗಿಲುಗಳ ಮೇಲೆ ರಕ್ತವನ್ನು ಹಚ್ಚಿದನು. ಯೆಹೂದ್ಯ ಜನರ ಚೊಚ್ಚಲು ಮಕ್ಕಳನ್ನು ಮರಣದೂತನು ಸಂಹರಿಸದಂತೆ ರಕ್ತವನ್ನು ಬಾಗಿಲುಗಳ ಮೇಲೆ ಹಚ್ಚಲಾಯಿತು. ಅವನು ತನ್ನಲ್ಲಿದ್ದ ನಂಬಿಕೆಯಿಂದಲೇ ಹೀಗೆ ಮಾಡಿದನು.

29ಮೋಶೆಯಿಂದ ಮುನ್ನಡೆಸಲ್ಪಟ್ಟ ಜನರು ಕೆಂಪು ಸಮುದ್ರವನ್ನು ಒಣಭೂಮಿಯೋ ಎಂಬಂತೆ ದಾಟಿದ್ದು ನಂಬಿಕೆಯಿಂದಲೇ. ಆದರೆ ಈಜಿಪ್ಟ್ ದೇಶದವರು ಕೆಂಪು ಸಮುದ್ರವನ್ನು ದಾಟಲು ಪ್ರಯತ್ನಿಸಿ, ಮುಳುಗಿಹೋದರು.

30ದೇವಜನರ ನಂಬಿಕೆಯಿಂದಲೇ ಜೆರಿಕೊ ಪಟ್ಟಣದ ಗೋಡೆಗಳ ಸುತ್ತಲೂ ಏಳು ದಿನಗಳವರೆಗೆ ಸುತ್ತಿದಾಗ ಅವು ಬಿದ್ದುಹೋದುವು.

31ರಹಾಬಳೆಂಬ ವೇಶ್ಯೆಯು ಇಸ್ರೇಲಿನ ಗೂಢಚಾರರನ್ನು ಬರಮಾಡಿಕೊಂಡು, ಅವರನ್ನು ಸ್ನೇಹಿತರಂತೆ ನೋಡಿಕೊಂಡಳು. ನಂಬಲೊಲ್ಲದ ಜನರನ್ನು ಕೊಂದಾಗ ಅವಳನ್ನು ಕೊಲ್ಲದೆ ಹೋದದ್ದು ಅವಳಲ್ಲಿದ್ದ ಆ ನಂಬಿಕೆಯಿಂದಲೇ.

32ನಾನು ನಿಮಗೆ ಮತ್ತಷ್ಟು ದೃಷ್ಟಾಂತಗಳನ್ನು ಹೇಳುವ ಅಗತ್ಯವಿದೆಯೊ? ನಾನು ಗಿದ್ಯೋನನ, ಬಾರಾಕನ, ಸಂಸೋನನ, ಎಫ್ಥನ, ದಾವೀದನ, ಸಮುವೇಲನ ಮತ್ತು ಪ್ರವಾದಿಗಳ ಕುರಿತು ನಿಮಗೆ ಹೇಳುವಷ್ಟು ಸಮಯ ನನಗಿಲ್ಲ. 33ಆ ಜನರೆಲ್ಲರೂ ದೊಡ್ಡ ನಂಬಿಕೆ ಉಳ್ಳವರಾಗಿದ್ದರು. ಅವರು ನಂಬಿಕೆಯಿಂದಲೇ ರಾಜ್ಯಗಳನ್ನು ಸೋಲಿಸಿದರು. ಅವರು ಯೋಗ್ಯವಾದ ಕಾರ್ಯಗಳನ್ನು ಮಾಡಿದರು ಮತ್ತು ದೇವರು ವಾಗ್ದಾನ ಮಾಡಿದ್ದುವುಗಳನ್ನು ಪಡೆದುಕೊಂಡರು. ಅವರಲ್ಲಿ ಕೆಲವರು ತಮ್ಮ ನಂಬಿಕೆಯಿಂದ ಸಿಂಹಗಳ ಬಾಯಿಗಳನ್ನು ಮುಚ್ಚಿದರು; 34ಕೆಲವರು ಉರಿಯುವ ಬೆಂಕಿಯನ್ನು ನಂದಿಸಿದರು; ಇನ್ನು ಕೆಲವರು ಕತ್ತಿಗಳ ಬಾಯಿಂದ ಪಾರಾದರು; ದುರ್ಬಲರಾಗಿದ್ದವರು ತಮ್ಮ ನಂಬಿಕೆಯಿಂದ ಪ್ರಬಲರಾದರು; ಯುದ್ಧದಲ್ಲಿ ಶಕ್ತಿಶಾಲಿಗಳಾಗಿ ಶತ್ರುಗಳನ್ನು ಸೋಲಿಸಿದರು. 35ಸತ್ತುಹೋಗಿದ್ದವರು ಸಾವಿನಿಂದ ಮೇಲೆದ್ದರು ಮತ್ತು ಅವರನ್ನು ಅವರವರ ಕುಟುಂಬಗಳ ಸ್ತ್ರೀಯರಿಗೆ ಒಪ್ಪಿಸಲಾಯಿತು. ಇತರ ಕೆಲವರು ಯಾತನೆಯನ್ನು ಅನುಭವಿಸುತ್ತಿದ್ದಾಗಲೂ ಪುನರುತ್ಥಾನದ ನಂತರವಿರುವ ಶ್ರೇಷ್ಠ ಜೀವಿತಕ್ಕಾಗಿ ಬಿಡುಗಡೆ ಹೊಂದಲು ಒಪ್ಪಲಿಲ್ಲ. 36ಕೆಲವರು ಇತರರಿಂದ ಅಪಹಾಸ್ಯಕ್ಕೆ ಗುರಿಯಾದರು, ಪೆಟ್ಟುಗಳನ್ನು ಅನುಭವಿಸಿದರು, ಸೆರೆವಾಸದಲ್ಲಿದ್ದರು. 37ಕೆಲವರನ್ನು ಕಲ್ಲೆಸೆದು ಕೊಂದರು, ಕೆಲವರನ್ನು ಅರ್ಧ ಕತ್ತರಿಸಿ ಎರಡು ಭಾಗ ಮಾಡಿದರು. ಕೆಲವರನ್ನು ಕತ್ತಿಗಳಿಂದ ಇರಿದುಕೊಂದರು. ಇವರಲ್ಲಿ ಕೆಲವರು ಕುರಿ ಮತ್ತು ಹೋತಗಳ ಚರ್ಮಗಳನ್ನು ತೊಟ್ಟುಕೊಂಡಿದ್ದರು; ಕೆಲವರು ಬಡವರಾಗಿದ್ದರು; ಹಿಂಸೆಗೆ ಒಳಗಾಗಿದ್ದರು ಮತ್ತು ಜನರ ಕ್ರೂರ ವರ್ತನೆಗೆ ಗುರಿಯಾಗಿದ್ದರು. 38ಇವರಿಗೆ ಈ ಲೋಕವು ಯೋಗ್ಯವಾಗಿರಲಿಲ್ಲ. ಇವರು ಮರುಭೂಮಿಗಳಲ್ಲಿ, ಬೆಟ್ಟಗಳಲ್ಲಿ ಅಲೆಯುತ್ತಾ ಗುಹೆಗಳಲ್ಲೂ ನೆಲದ ಕುಳಿಗಳಲ್ಲಿಯೂ ವಾಸಿಸುತ್ತಿದ್ದರು.

39ಇವರೆಲ್ಲರೂ ತಮ್ಮ ನಂಬಿಕೆಯ ವಿಷಯದಲ್ಲಿ ಪ್ರಸಿದ್ಧರಾಗಿದ್ದರು. ಆದರೆ ದೇವರ ದೊಡ್ಡ ವಾಗ್ದಾನವನ್ನು ಇವರಲ್ಲಿ ಯಾರೂ ಹೊಂದಿಕೊಳ್ಳಲಿಲ್ಲ. 40ದೇವರು ನಮಗೆ ಶ್ರೇಷ್ಠವಾದದ್ದನ್ನು ಕೊಡಲು ಯೋಜನೆ ಮಾಡಿದನು. ನಮ್ಮೊಡನೆ ಮಾತ್ರ ಅವರು ಪರಿಪೂರ್ಣರಾಗಬೇಕೆಂಬುದೇ ಆ ಯೋಜನೆ.

### ಯೇಸುವಿನ ಮಾದರಿಯನ್ನು ನಾವು ಅನುಸರಿಸಬೇಕು

12 ನಮ್ಮ ಸುತ್ತಲೂ ನಂಬಿಕೆಯುಳ್ಳ ಅನೇಕ ಜನರಿದ್ದಾರೆ. ನಂಬಿಕೆ ಎಂದರೇನೆಂದು ಅವರ ಜೀವಿತಗಳೇ ಸಾಕ್ಷಿ ಹೇಳುತ್ತವೆ. ಆದ್ದರಿಂದ ನಾವು ಅವರಂತಿರಬೇಕು. ನಮ್ಮ ಮುಂದಿರುವ ಗುರಿಯನ್ನು ಮುಟ್ಟಲು ಓಡಬೇಕು ಮತ್ತು ನಮ್ಮ ಪ್ರಯತ್ನವನ್ನು ನಿಲ್ಲಿಸಬಾರದು. ನಮ್ಮನ್ನು ತಡೆಯುವ ಎಲ್ಲಾ ವಿಷಯಗಳನ್ನೇ ನಮ್ಮ ಜೀವನದಿಂದ ತೆಗೆದುಹಾಕಬೇಕು. ನಮ್ಮನ್ನು ಸುಲಭವಾಗಿ ಹಿಡಿದುಕೊಳ್ಳುವ ಪಾಪದಿಂದ ಬಿಡಿಸಿಕೊಳ್ಳಬೇಕು. 2ನಾವು ಯಾವಾಗಲೂ ಯೇಸುವನ್ನು ಮಾದರಿಯಾಗಿ ಇಟ್ಟುಕೊಂಡಿರಬೇಕು. ನಮ್ಮ ನಂಬಿಕೆಯನ್ನು ಹುಟ್ಟಿಸುವವನೂ ಪೂರೈಸುವವನೂ ಆತನೇ. ಆತನು ತನ್ನ ಮುಂದೆ ಇಟ್ಟಿದ್ದ ಸಂತೋಷಕ್ಕೋಸ್ಕರ ಅವಮಾನವನ್ನು ಅಲಕ್ಷ್ಯಮಾಡಿ ಶಿಲುಬೆಯ ಮರಣವನ್ನು ಸಹಿಸಿಕೊಂಡನು. ಈಗ ಆತನು ದೇವರ ಸಿಂಹಾಸನದ ಬಲಭಾಗದಲ್ಲಿ ಕುಳಿತಿರುವನು. 3ಯೇಸುವನ್ನು ಕುರಿತು ಯೋಚಿಸಿರಿ. ಪಾಪಪೂರಿತವಾದ ಜನರು ಆತನ ವಿರುದ್ಧವಾಗಿ ಕೆಟ್ಟದ್ದನ್ನು ಮಾಡುವಾಗ ಆತನು ತಾಳ್ಮೆಯಿಂದ ಇದ್ದನು. ಅಂತೆಯೇ ನೀವೂ ತಾಳ್ಮೆಯಿಂದರಬೇಕು ಮತ್ತು ಧೈರ್ಯಗೆಡಬಾರದು.

### ದೇವರು ತಂದೆಯಂತಿದ್ದಾನೆ

4ನೀವು ಪಾಪದ ವಿರುದ್ಧ ಹೋರಾಡುತ್ತಿದ್ದರೂ ನಿಮ್ಮ ಹೋರಾಟಗಳು ನಿಮ್ಮನ್ನು ಸಾವಿನ ಸಮೀಪಕ್ಕೆ ಇನ್ನೂ ತಂದಿಲ್ಲ. 5ನೀವು ದೇವರ ಮಕ್ಕಳಾಗಿದ್ದೀರಿ. ಆತನು ನಿಮಗೆ ನೆಮ್ಮದಿಯ ಮಾತುಗಳನ್ನು ನುಡಿಯುತ್ತಾನೆ. ನೀವು ಆ ಮಾತುಗಳನ್ನು ಮರೆತಿರುವಿರಿ:

> ‘‘ಮಗನೇ ಪ್ರಭುವಿನ ಶಿಕ್ಷೆಯನ್ನು ತಾತ್ಸಾರ
> ಮಾಡಬೇಡ. ಪ್ರಭುವು ನಿನ್ನನ್ನು ಗದರಿಸುವಾಗ
> ಬೇಸರಗೊಳ್ಳಬೇಡ.
> 6 ಪ್ರಭುವು ತಾನು ಪ್ರೀತಿಸುವವನನ್ನೇ ದಂಡಿಸು
> ತ್ತಾನೆ; ಯಾರನ್ನು ಮಗನೆಂದು ಒಪ್ಪಿಕೊಳ್ಳು
> ವನೋ ಅವನನ್ನು ದಂಡಿಸುತ್ತಾನೆ.’’
>
> *ಜ್ಞಾನೋಕ್ತಿಗಳು 3:11-12*

7ಆದುದರಿಂದ ತಂದೆಯು ನೀಡುವ ದಂಡನೆ ಎಂಬುದಾಗಿ ಅವುಗಳನ್ನು ಸಹಿಸಿಕೊಳ್ಳಿ. ತಂದೆಯು ತನ್ನ ಮಕ್ಕಳನ್ನು ದಂಡಿಸುವಂತೆ ದೇವರು ನಿಮ್ಮನ್ನು ಈ ರೀತಿ ಶಿಕ್ಷಿಸುತ್ತಾನೆ. ಎಲ್ಲಾ ಮಕ್ಕಳು ತಮ್ಮ ತಂದೆಗಳಿಂದ ಶಿಕ್ಷಿಸಲ್ಪಡುತ್ತಾರೆ. 8ನೀವು ಎಂದೂ ಶಿಕ್ಷಿಸಲ್ಪಡದಿದ್ದರೆ ನಿಮ್ಮ ತಂದೆಗೆ ನೀವು ನಿಜವಾದ ಮಕ್ಕಳಲ್ಲ. 9ಈ ಲೋಕದಲ್ಲಿ ನಮ್ಮೆಲ್ಲರನ್ನೂ ಶಿಕ್ಷಿಸಿದಂಥ ತಂದೆಗಳು ನಮಗಿದ್ದರು. ನಾವು ಅವರನ್ನು ಗೌರವಿಸಿದೆವು. ಆದ್ದರಿಂದ ನಮ್ಮ ಆತ್ಮಗಳಿಗೆ ತಂದೆಯಾಗಿರುವಾತನಿಂದ ದಂಡನೆಗಳನ್ನು ಸ್ವೀಕರಿಸಿಕೊಳ್ಳುವುದು ಬಹಳ ಮುಖ್ಯವಾದದ್ದು. ನಾವು ಹೀಗೆ ಮಾಡಿದರೆ, ಜೀವವನ್ನು ಹೊಂದಿಕೊಳ್ಳುವೆವು. 10ಈ ಲೋಕದ ನಮ್ಮ ತಂದೆಗಳು ನಮ್ಮನ್ನು ಸ್ವಲ್ಪಕಾಲ ದಂಡಿಸಿದರು. ಅವರು ತಮಗೆ ಉತ್ತಮವೆಂದು ತೋರಿದ ರೀತಿಯಲ್ಲಿ ನಮ್ಮನ್ನು ಶಿಕ್ಷಿಸಿ

ದರು. ಆದರೆ ದೇವರು ನಮಗೆ ಸಹಾಯ ಮಾಡಲು ನಮ್ಮನ್ನು
ಶಿಕ್ಷಿಸುತ್ತಾನೆ. ಏಕೆಂದರೆ ನಾವೂ ಆತನಂತೆ ಪರಿಶುದ್ಧರಾಗ
ಬೇಕೆಂಬುದೇ ಆತನ ಉದ್ದೇಶ. 11ಯಾವುದೇ ದಂಡನೆಯಾಗಲಿ
ತತ್ಕಾಲಕ್ಕೆ ಸಂತೋಷಕರವಾಗಿರದೆ ದುಃಖಕರವಾಗಿರುತ್ತದೆ.
ಆದರೆ ಆ ತರುವಾಯ ದಂಡನೆಯಿಂದ ನಾವು ಕಲಿತುಕೊಂಡು
ಯೋಗ್ಯವಾದ ಜೀವಿತವನ್ನು ಆರಂಭಿಸುವುದರ ಮೂಲಕ
ನಮಗೆ ಸಮಾಧಾನ ಉಂಟಾಗುತ್ತದೆ.

### ನೀವು ಹೇಗೆ ಜೀವಿಸುತ್ತಿದ್ದೀರಿ ಎಂಬುದರ ಬಗ್ಗೆ ಎಚ್ಚರಿಕೆಯಿಂದಿರಿ

12ನೀವು ದುರ್ಬಲರಾಗಿದ್ದೀರಿ. ಆದ್ದರಿಂದ ನಿಮ್ಮನ್ನು ಮತ್ತೆ
ಬಲಪಡಿಸಿಕೊಳ್ಳಿರಿ. 13ನೀವು ಯೋಗ್ಯವಾದ ಮಾರ್ಗದಲ್ಲಿ
ಜೀವಿಸಿದರೆ ರಕ್ಷಣೆ ಹೊಂದುವಿರಿ ಮತ್ತು ನಿಮ್ಮನ್ನು
ನಾಶಗೊಳಿಸಲು ನಿಮ್ಮ ಬಲಹೀನತೆಗಳಿಗೆ ಸಾಧ್ಯವಾಗುವುದಿಲ್ಲ.
14ಎಲ್ಲಾ ಜನರೊಂದಿಗೆ ಸಮಾಧಾನದಿಂದಲೂ ಪರಿಶುದ್ಧ
ರಾಗಿಯೂ ಜೀವಿಸಲು ಪ್ರಯತ್ನಿಸಿರಿ. ಯಾವನ ಜೀವಿತವು
ಪರಿಶುದ್ಧವಾಗಿರುವುದಿಲ್ಲವೋ ಅವನೆಂದಿಗೂ ಪ್ರಭುವನ್ನು
ನೋಡುವುದಿಲ್ಲ. 15ನಿಮ್ಮಲ್ಲಿ ಯಾರೂ ದೇವರ ಕೃಪೆಯನ್ನು
ಕಳೆದುಕೊಳ್ಳದಂತೆ ಎಚ್ಚರದಿಂದಿರಿ. ನಿಮ್ಮಲ್ಲಿ ಯಾವನೂ ಚಿಗುರಿ
ಬೆಳೆಯುವ ವಿಷದ ಬೇರಿನಂತಾಗದಂತೆ ಎಚ್ಚರಿಕೆಯಿಂದಿರಿ.
ಅಂಥವನಿಂದ ನಿಮ್ಮ ಇಡೀ ಗುಂಪೇ ಹಾಳಾಗುವುದು.
16ನಿಮ್ಮಲ್ಲಿ ಯಾರೂ ಲೈಂಗಿಕ ಪಾಪ ಮಾಡದಂತೆ ಜಾಗ್ರತೆ
ಯಿಂದಿರಿ; ಪ್ರಾಪಂಚಿಕನಾದ ಏಸಾವನಂತೆ ಆಗದಿರಲು ಎಚ್ಚರ
ದಿಂದಿರಿ. ಹಿರಿಯ ಮಗನಾದ ಏಸಾವನು ತನ್ನ ತಂದೆಯ
ಸಮಸ್ತಕ್ಕೂ ವಾರಸುದಾರನಾಗುತ್ತಿದ್ದನು. ಆದರೆ ಅವನು
ಒಂದು ಹೊತ್ತಿನ ಊಟಕ್ಕಾಗಿ ಎಲ್ಲವನ್ನೂ ಮಾರಿದನು.
17ನಿಮಗೇ ತಿಳಿದಿರುವಂತೆ, ಆ ಬಳಿಕ ಅವನು ತನ್ನ ತಂದೆಯ
ಆಶೀರ್ವಾದವನ್ನು ಪಡೆದುಕೊಳ್ಳಲು ಬಹಳವಾಗಿ ಗೋಳಾ
ಡಿದನು. ಏಸಾವನು ತಾನು ಮಾಡಿದ್ದನ್ನು ಬದಲಾಯಿಸಲಾಗ
ದ್ದರಿಂದ ತಂದೆಯ ಆಶೀರ್ವಾದವು ಅವನಿಗೆ ದೊರೆಯಲಿಲ್ಲ.
18ನೀವು ಒಂದು ಹೊಸ ಸ್ಥಳಕ್ಕೆ ಬಂದಿರುವಿರಿ. ಇಸ್ರೇಲಿನ
ಜನರು ಬಂದ ಬೆಟ್ಟದ ಸ್ಥಳವಲ್ಲ ಅದು. ಮುಟ್ಟುವುದಕ್ಕೆ
ಸಾಧ್ಯವಾಗುವಂತಹ ಮತ್ತು ಬೆಂಕಿ ಹತ್ತಿಕೊಂಡಿರುವಂತಹ
ಬೆಟ್ಟದ ಬಳಿಗೆ ನೀವು ಬಂದಿಲ್ಲ. ನೀವು ಕಗ್ಗತ್ತಲೆಯ, ದುಃಖದ
ಬಿರುಗಾಳಿಯ ಬಳಿಗೆ ಬಂದಿಲ್ಲ. 19ನೀವು ತುತ್ತೂರಿಯ ಧ್ವನಿಯ
ಬಳಿಗಾಗಲಿ ಅಥವಾ ನಿಮ್ಮೊಂದಿಗೆ ಮಾತನಾಡುವ ಸ್ವರದ
ಬಳಿಗಾಗಲಿ ಬಂದಿಲ್ಲ. ಜನರು ಆ ಧ್ವನಿಯನ್ನು ಕೇಳಿದಾಗ,
ಮತ್ತೊಂದು ಮಾತನ್ನು ಹೇಳಬಾರದೆಂದು ಬೇಡಿಕೊಂಡರು.
20''ಆ ಬೆಟ್ಟವನ್ನು ಮುಟ್ಟುವ ಏನನ್ನಾದರೂ ಸರಿ, ಅದು ಒಂದು
ಪ್ರಾಣಿಯಾಗಿದ್ದರೂ ಅದನ್ನು ಕಲ್ಲೆಸೆದು ಕೊಂದುಹಾಕಿರಿ''*
ಎಂಬ ಆಜ್ಞೆಯನ್ನು ಕೇಳಲು ಅವರು ಇಷ್ಟಪಡಲಿಲ್ಲ. 21ಆ
ಜನರು ಅಂದು ಕಂಡದ್ದು ಭಯಂಕರವಾಗಿದ್ದುದರಿಂದ
ಮೋಶೆಯು, ''ನಾನು ಭಯದಿಂದ ನಡುಗುತ್ತಿದ್ದೇನೆ''*
ಎಂದು ಹೇಳಿದನು.

22ಆದರೆ ನೀವು ಅಂಥ ಸ್ಥಳಕ್ಕೆ ಬಂದಿಲ್ಲ. ನೀವು ಬಂದಿರುವ
ಹೊಸ ಸ್ಥಳ ಚಿಯೋನ್‌ಬೆಟ್ಟ, ಜೀವ ಸ್ವರೂಪನಾದ ದೇವರು
ವಾಸವಾಗಿರುವ ಪರಲೋಕದ ಜೆರುಸಲೇಮಿಗೂ ಸಹಸ್ರಾರು
ದೇವದೂತರು ಸಂತೋಷದಿಂದ ಒಟ್ಟುಗೂಡಿರುವ ಸ್ಥಳಕ್ಕೂ
ಬಂದಿರುವಿರಿ. 23ದೇವರ ಚೊಚ್ಚಲು ಮಕ್ಕಳ ಸಭೆಗೆ ನೀವು
ಬಂದಿರುವಿರಿ. ಅವರ ಹೆಸರುಗಳನ್ನು ಪರಲೋಕದಲ್ಲಿ ಬರೆಯ
ಲಾಗಿದೆ. ನೀವು ಜನರಿಗೆಲ್ಲ ತೀರ್ಪು ನೀಡುವ ದೇವರ ಬಳಿಗೂ
ಪರಿಪೂರ್ಣರನ್ನಾಗಿ ಮಾಡಲ್ಪಟ್ಟ ಒಳ್ಳೆಯ ಜನರ ಆತ್ಮಗಳ
ಬಳಿಗೂ ಬಂದಿರುವಿರಿ. 24ದೇವರಿಂದ ಹೊಸ ಒಡಂಬಡಿಕೆ
ಯನ್ನು ತಂದಿರುವ ಯೇಸುವಿನ ಬಳಿಗೂ ಹೇಬೆಲನ ರಕ್ತಕ್ಕಿಂತ
ಉತ್ತಮ ಸಂಗತಿಗಳನ್ನು ನಮಗೆ ತಿಳಿಸುವ ಪ್ರೋಕ್ಷಣ ರಕ್ತದ
ಬಳಿಗೂ ಬಂದಿದ್ದೀರಿ.
25ದೇವರು ಮಾತನಾಡುವಾಗ ಆಲಿಸದೆ ಇರಬೇಡಿ. ಆತನು
ಇಸ್ರೇಲರಿಗೆ ಈ ಲೋಕದಲ್ಲಿ ಎಚ್ಚರಿಕೆ ನೀಡಿದಾಗ, ಅವರು
ಆತನ ಮಾತನ್ನು ಕೇಳಲಿಲ್ಲ. ಆದರೆ ಅವರು ತಪ್ಪಿಸಿಕೊಳ್ಳ
ಲಾಗಲಿಲ್ಲ. ಈಗ ದೇವರು ಪರಲೋಕದಿಂದ ಮಾತಾಡು
ತ್ತಿದ್ದಾನೆ. ಆತನ ಮಾತನ್ನು ಆಲಿಸದ ಜನರು ಹೇಗೆ ತಪ್ಪಿಸಿಕೊಳ್ಳ
ಲಾದೀತು? 26ಆತನು ಮುಂಚೆ ಮಾತನಾಡಿದಾಗ, ಆತನ
ಧ್ವನಿಯು ಭೂಮಿಯನ್ನು ನಡುಗಿಸಿತು. ಆದರೆ ಈಗ ಆತನು,
''ಮತ್ತೊಂದು ಸಾರಿ ನಾನು ಭೂಮಿಯನ್ನು ನಡುಗಿಸುತ್ತೇನೆ,
ಪರಲೋಕವನ್ನೂ ನಡುಗಿಸುತ್ತೇನೆ''* ಎಂದು ವಾಗ್ದಾನ
ಮಾಡಿದ್ದಾನೆ. 27''ಮತ್ತೊಂದು ಸಾರಿ'' ಎಂಬ ಮಾತುಗಳು ಸೃಷ್ಟಿ
ಗೊಂಡ ಎಲ್ಲವೂ ನಾಶವಾಗುತ್ತವೆ ಎಂಬುದನ್ನು ನಮಗೆ ಸ್ಪಷ್ಟ
ಪಡಿಸುತ್ತವೆ. ಅವುಗಳನ್ನು ನಡುಗಿಸಲು ಸಾಧ್ಯ. ನಡುಗಿಸಲಾಗ
ದಂಥವುಗಳು ಮಾತ್ರ ಸ್ಥಿರವಾಗಿರುತ್ತವೆ.
28ಆದುದರಿಂದ, ನಡುಗಿಸಲಾಗದಿರುವ ರಾಜ್ಯವನ್ನು ನಾವು
ಹೊಂದಿರುವುದರಿಂದ ದೇವರಿಗೆ ಕೃತಜ್ಞತೆಯಿಂದಿರಬೇಕು.
ಆತನಿಗೆ ಮೆಚ್ಚಿಕೆಕರವಾದ ಆರಾಧನೆಯನ್ನು ಭಯಭಕ್ತಿಯಿಂದ
ಮಾಡಬೇಕು. 29ಏಕೆಂದರೆ ನಮ್ಮ ದೇವರು ನಾಶಮಾಡುವ
ಬೆಂಕಿಯಂತಿದ್ದಾನೆ.

13 ನೀವು ಕ್ರಿಸ್ತನಲ್ಲಿ ಸಹೋದರ ಸಹೋದರಿಯರಾಗಿರು
ವುದರಿಂದ ಒಬ್ಬರನ್ನೊಬ್ಬರು ಪ್ರೀತಿಸಿರಿ. 2ಅತಿಥಿ
ಸತ್ಕಾರ ಮಾಡಿರಿ. ಕೆಲವರು ತಿಳಿಯದೆ ದೇವದೂತರನ್ನೂ
ಸತ್ಕರಿಸಿದ್ದಾರೆ. 3ಸೆರೆಮನೆಯಲ್ಲಿರುವ ಜನರನ್ನು ಮರೆಯದಿರಿ.
ನೀವೂ ಅವರ ಜೊತೆಯಲ್ಲಿ ಸೆರೆಮನೆಯಲ್ಲಿದ್ದೀರೊ ಎಂಬಂತೆ
ನೆನಪು ಮಾಡಿಕೊಳ್ಳಿ ಮತ್ತು ಸಂಕಟಕ್ಕೊಳಗಾಗಿರುವ ಜನರನ್ನು
ಮರೆಯದಿರಿ. ನೀವೂ ಅವರ ಜೊತೆಯಲ್ಲಿ ಸಂಕಟಪಡು
ತ್ತಿರುವಿರೋ ಎಂಬಂತೆ ನೆನಪು ಮಾಡಿಕೊಳ್ಳಿ.
4ಮದುವೆಯನ್ನು ಜನರೆಲ್ಲರೂ ಗೌರವಿಸಬೇಕು. ಗಂಡ
ಹೆಂಡತಿಯರ ಸಂಬಂಧ ಪರಿಶುದ್ಧವಾಗಿರಬೇಕು. ಲೈಂಗಿಕ
ಪಾಪಗಳನ್ನು ಮಾಡುವವರು ಮತ್ತು ವ್ಯಭಿಚಾರವನ್ನು ಮಾಡು
ವವರು ದೇವರ ತೀರ್ಪಿಗೆ ಒಳಗಾಗಿದ್ದಾರೆ.
5ಹಣದ ಮೇಲೆ ನಿಮಗಿರುವ ವ್ಯಾಮೋಹವನ್ನು ದೂರತಳ್ಳಿರಿ.
ನಿಮ್ಮಲ್ಲಿರುವ ವಸ್ತುಗಳಲ್ಲಿ ತೃಪ್ತಿಯಿಂದಿರಿ. ದೇವರು ಹೀಗೆ
ಹೇಳಿದ್ದಾನೆ:

---

**ಆ ಬೆಟ್ಟವನ್ನು ... ಕೊಂದುಹಾಕಿರಿ** ವಿಮೋಚನ. 19:12,13.

**ನಾನು ... ನಡುಗುತ್ತಿದ್ದೇನೆ** ಧರ್ಮೋಪದೇಶ. 9:19.

**ನಾನು ... ನಡುಗಿಸುತ್ತೇನೆ** ಹಗ್ಗಾಯ 2:6.

‘‘ನಾನು ನಿಮ್ಮನ್ನು ಎಂದೆಂದಿಗೂ ಕೈಬಿಡುವುದಿಲ್ಲ. ನಾನು ನಿಮ್ಮನ್ನು ಎಂದೆಂದಿಗೂ ತೊರೆದು ಬಿಡುವುದಿಲ್ಲ.

*ಧರ್ಮೋಪದೇಶ 31:6*

6 ಆದ್ದರಿಂದ ನಾವು ಖಚಿತವಾಗಿ ಹೀಗೆ ಹೇಳ ಬಹುದು: ಪ್ರಭುವೇ ನನ್ನ ಸಹಾಯಕನು: ನಾನು ಹೆದರುವುದಿಲ್ಲ. ಜನರು ನನಗೆ ಏನೂ ಮಾಡಲಾರರು.’’

*ಕೀರ್ತನೆ 118:6*

7ನಿಮ್ಮ ಸಭಾನಾಯಕರನ್ನು ನೆನಪು ಮಾಡಿಕೊಳ್ಳಿ. ಅವರು
ನಿಮಗೆ ದೇವರ ಸಂದೇಶವನ್ನು ಬೋಧಿಸಿದರು. ಅವರು ಹೇಗೆ
ಜೀವಿಸಿದ್ದರು ಮತ್ತು ಹೇಗೆ ಸತ್ತರು ಎಂಬುದನ್ನು ನೆನಪಿಸಿಕೊಳ್ಳಿ,
ಅವರ ನಂಬಿಕೆಯನ್ನು ಅನುಸರಿಸಿರಿ. 8ಯೇಸು ಕ್ರಿಸ್ತನು ನಿನ್ನೆ
ಇದ್ದಂತೆ, ಇಂದಿಗೂ ಇದ್ದಾನೆ, ಸದಾಕಾಲ ಹಾಗೆಯೇ ಇರುವನು.
9ನಿಮ್ಮನ್ನು ತಪ್ಪು ಮಾರ್ಗಕ್ಕೆಳೆಯುವಂತಹ ಅನ್ಯೋಪ
ದೇಶಗಳ ಕಡೆಗೆ ಗಮನಕೊಡಬೇಡಿ. ನಿಮ್ಮ ಹೃದಯಗಳು
ದೇವರ ಕೃಪೆಯಿಂದ ಬಲವಾಗಬೇಕೇ ಹೊರತು ಆಹಾರದ
ನಿಯಮಗಳ ಪಾಲನೆಯಿಂದಲ್ಲ. ಆ ನಿಯಮಗಳ ಪಾಲನೆಯು
ಜನರಿಗೆ ಸಹಾಯಕವಾಗುವುದಿಲ್ಲ.
10ನಮಗೊಂದು ಯಜ್ಞವಿದೆ. ಪವಿತ್ರ ಗುಡಾರದಲ್ಲಿ ಸೇವೆ
ಸಲ್ಲಿಸುತ್ತಿರುವ ಯಾಜಕರು ನಮ್ಮ ಯಜ್ಞದಿಂದ ತಿನ್ನಲಾಗು
ವುದಿಲ್ಲ. 11ಪ್ರಧಾನಯಾಜಕನು ಪಶುಗಳ ರಕ್ತವನ್ನು ಮಹಾ
ಪವಿತ್ರಸ್ಥಳದೊಳಕ್ಕೆ ತೆಗೆದುಕೊಂಡು ಹೋಗುತ್ತಾನೆ. ಅವನು
ಪಾಪಗಳಿಗಾಗಿ ಆ ರಕ್ತವನ್ನು ಅರ್ಪಿಸುತ್ತಾನೆ. ಆದರೆ ಆ ಪಶುಗಳ
ದೇಹಗಳು ಪಾಳೆಯದ ಆಚೆ ಸುಡಲ್ಪಡುತ್ತವೆ. 12ಆದ್ದರಿಂದ
ಯೇಸುವು ನಗರದ ಹೊರಗಡೆ ಸಂಕಟವನ್ನು ಅನುಭವಿಸಿದನು.
ಆತನು ತನ್ನ ಜನರನ್ನು ಪವಿತ್ರರನ್ನಾಗಿಸಲು, ತನ್ನ ಸ್ವಂತ ರಕ್ತವನ್ನೇ
ಅರ್ಪಿಸಿ ಸತ್ತನು. 13ನಾವು ಪಾಳೆಯದ ಹೊರಗಡೆಯಲ್ಲಿರುವ
ಆತನ ಬಳಿಗೆ ಹೋಗಬೇಕು. ಆತನಿಗಾದ ಅಪಮಾನವನ್ನು
ನಾವೂ ಸ್ವೀಕರಿಸಿಕೊಳ್ಳಬೇಕು. 14ಈ ಲೋಕದಲ್ಲಿ ಶಾಶ್ವತ
ವಾಗಿರುವ ನಗರವೇ ಇಲ್ಲ. ಆದರೆ ನಾವು ಮುಂದೆ ಬರುವ
ನಗರಕ್ಕಾಗಿ ಕಾಯುತ್ತಿದ್ದೇವೆ. 15ಆದ್ದರಿಂದ ಆತನ ಮೂಲಕ
ನಾವು ದೇವರಿಗೆ ಯಜ್ಞಗಳನ್ನು ಅರ್ಪಿಸುವುದನ್ನು
ನಿಲ್ಲಿಸಬಾರದು. ಆತನೇ ಪ್ರಭುವೆಂದು ನಮ್ಮ ಬಾಯಿಂದ ಅರಿಕೆ
ಮಾಡುವುದೇ ನಾವು ಅರ್ಪಿಸುವ ಯಜ್ಞವಾಗಿದೆ. 16ಇದಲ್ಲದೆ
ಪರೋಪಕಾರವನ್ನೂ ದಾನಧರ್ಮವನ್ನೂ ಮರೆಯದಿರಿ. ಇವೇ
ದೇವರಿಗೆ ಸಮರ್ಪಕವಾದ ಯಜ್ಞಗಳು.
17ನಿಮ್ಮ ಸಭಾನಾಯಕರಿಗೆ ವಿಧೇಯರಾಗಿರಿ ಮತ್ತು ಅವರ
ಅಧಿಕಾರದ ಅಧೀನದಲ್ಲಿರಿ. ಅವರೇ ನಿಮಗೆ ಜವಾಬ್ದಾರರು.
ಅವರು ನಿಮ್ಮ ಆತ್ಮಗಳನ್ನು ಕಾಯುವವರಾಗಿದ್ದಾರೆ. ಅವರು ಈ
ಕಾರ್ಯವನ್ನು ವ್ಯಸನದಿಂದ ಮಾಡದೆ ಸಂತೋಷದಿಂದ
ಮಾಡಲು ಸಾಧ್ಯವಾಗುವಂತೆ ಅವರಿಗೆ ವಿಧೇಯರಾಗಿರಿ. ಅವರ
ಕಾರ್ಯವನ್ನು ಕಷ್ಟಕರವನ್ನಾಗಿ ಮಾಡುವುದರಿಂದ ನಿಮಗೇನೂ
ಪ್ರಯೋಜನವಿಲ್ಲ.
18ನಮಗೋಸ್ಕರ ಪ್ರಾರ್ಥಿಸುವುದನ್ನು ಮುಂದುವರಿಸಿರಿ.
ನಾವು ಯಾವಾಗಲೂ ಉತ್ತಮ ಕಾರ್ಯಗಳನ್ನು ಮಾಡಲು
ಪ್ರಯತ್ನಿಸುವುದರಿಂದ, ನಮ್ಮ ಹೃದಯಗಳು ಶುದ್ಧವಾಗಿವೆ
ಎಂಬ ನಂಬಿಕೆ ನಮಗಿದೆ. 19ದೇವರು ನನ್ನನ್ನು ನಿಮ್ಮ ಬಳಿಗೆ
ಬೇಗನೆ ಕಳುಹಿಸುವಂತೆ ನೀವು ಆತನಲ್ಲಿ ಪ್ರಾರ್ಥನೆಯನ್ನು
ಮಾಡಬೇಕೆಂದು ನಾನು ಬೇಡಿಕೊಳ್ಳುತ್ತೇನೆ. ನನಗೆ ಅತ್ಯಗತ್ಯ
ವಾದದ್ದು ಇದೇ. 20-21ಶಾಂತಿಸ್ವರೂಪನಾದ ದೇವರು ನಿಮಗೆ
ಬೇಕಾದ ತನ್ನ ವರದಾನಗಳನ್ನು ದಯಪಾಲಿಸಲಿ ಎಂದು ನಾನು
ಆತನಲ್ಲಿ ಪ್ರಾರ್ಥಿಸುತ್ತೇನೆ. ಏಕೆಂದರೆ ಆಗ ನೀವು ಆತನ
ಇಷ್ಟಕ್ಕನುಸಾರವಾದವುಗಳನ್ನೆಲ್ಲಾ ಮಾಡಲು ಸಾಧ್ಯವಾಗು
ವುದು. ತನ್ನ ರಕ್ತವನ್ನು ಸುರಿಸಿ ಸಭೆಯೆಂಬ ಹಿಂಡಿಗೆ ಮಹಾ
ಕುರುಬನಾಗಿರುವ ನಮ್ಮ ಪ್ರಭುವಾದ ಯೇಸುವನ್ನು ಸತ್ತ
ವರೊಳಗಿಂದ ಮೇಲಕ್ಕೆ ಎಬ್ಬಿಸಿದವನು ದೇವರೇ. ಆತನ ರಕ್ತವು
ಶಾಶ್ವತವಾದ ಹೊಸ ಒಪ್ಪಂದವನ್ನಾರಂಭಿಸಿತು. ದೇವರು ತನಗೆ
ಸಂತೋಷವನ್ನು ಉಂಟುಮಾಡುವ ಕಾರ್ಯಗಳನ್ನು ಯೇಸು
ಕ್ರಿಸ್ತನ ಮೂಲಕ ನಮ್ಮಲ್ಲಿ ನಡೆಸಲಿ. ಯೇಸುವಿಗೆ ಎಂದೆಂದಿಗೂ
ಮಹಿಮೆಯಾಗಲಿ. ಆಮೆನ್.
22ನನ್ನ ಸಹೋದರ ಸಹೋದರಿಯರೇ, ನಾನು ಹೇಳಿದ ಈ
ಸಂಗತಿಗಳನ್ನು ನೀವು ತಾಳ್ಮೆಯಿಂದ ಆಲಿಸಬೇಕೆಂದು ನಿಮ್ಮಲ್ಲಿ
ಬೇಡಿಕೊಳ್ಳುತ್ತೇನೆ. ನಿಮ್ಮನ್ನು ಬಲಪಡಿಸುವುದಕ್ಕಾಗಿ ಈ
ಸಂಗತಿಗಳನ್ನು ಹೇಳಿದೆನು. ಈ ಪತ್ರವು ಬಹು ದೀರ್ಘ
ವಾದದ್ದೇನೂ ಅಲ್ಲ. 23ನಮ್ಮ ಸಹೋದರನಾದ ತಿಮೊಥೆ
ಯನಿಗೆ ಸೆರೆಮನೆಯಿಂದ ಬಿಡುಗಡೆ ಆಯಿತೆಂಬುದು ನಿಮಗೆ
ತಿಳಿದಿರಲಿ. ಅವನು ನನ್ನ ಬಳಿಗೆ ಬೇಗನೆ ಬಂದರೆ, ನಾವಿಬ್ಬರೂ
ನಿಮ್ಮನ್ನು ನೋಡಲುಬರುತ್ತೇವೆ. 24ನಿಮ್ಮ ಸಭಾನಾಯಕರಿಗೆಲ್ಲ
ಮತ್ತು ದೇವಜನರಿಗೆಲ್ಲ ನಮ್ಮ ವಂದನೆಗಳನ್ನು ತಿಳಿಸಿ. ಇಟಲಿಯ
ದೇವ ಜನರೆಲ್ಲರೂ ನಿಮಗೆ ವಂದನೆಗಳನ್ನು ಹೇಳುತ್ತಾರೆ.
25ದೇವರ ಕೃಪೆಯು ನಿಮ್ಮೆಲ್ಲರೊಂದಿಗಿರಲಿ.

# ಯಾಕೋಬನು ಬರೆದ ಪತ್ರ

1 ದೇವರ ಮತ್ತು ಪ್ರಭುವಾದ ಯೇಸು ಕ್ರಿಸ್ತನ ಸೇವಕನಾದ
ಯಾಕೋಬನು ಲೋಕದಲ್ಲೆಲ್ಲಾ ಚದರಿಹೋಗಿರುವ
ದೇವಜನರಿಗೆ ಬರೆದ ಪತ್ರ. ನಿಮಗೆ ಶುಭವಾಗಲಿ.

## ನಂಬಿಕೆ ಮತ್ತು ಜ್ಞಾನ

2ನನ್ನ ಸಹೋದರ ಸಹೋದರಿಯರೇ, ನಿಮಗೆ ಅನೇಕ
ತೊಂದರೆಗಳು ಬರುತ್ತವೆ. ಆದರೆ ಅವುಗಳು ಬಂದಾಗ ನೀವು
ಬಹಳ ಸಂತೋಷಪಡಬೇಕು. 3ಏಕೆಂದರೆ ಅವುಗಳು ನಿಮ್ಮ
ನಂಬಿಕೆಯನ್ನು ಪರಿಶೋಧಿಸಲು ಬಂದಿವೆ ಎಂಬುದು ನಿಮಗೆ
ತಿಳಿದದೆ. ಅವು ನಿಮ್ಮಲ್ಲಿ ತಾಳ್ಮೆಯನ್ನು ಉಂಟುಮಾಡುತ್ತವೆ.
4ತಾಳ್ಮೆಯು ತನ್ನ ಕಾರ್ಯವನ್ನು ಪೂರೈಸಲಿ. ಆಗ ನೀವು
ನಿಷ್ಕಳಂಕರೂ ಮತ್ತು ಪರಿಪೂರ್ಣರೂ ಆಗುವಿರಿ ಮತ್ತು ನಿಮಗೆ
ಬೇಕಾದುದೆಲ್ಲವೂ ದೊರೆಯುವುದು. 5ಆದರೆ ನಿಮ್ಮಲ್ಲಿ
ಯಾರಿಗಾದರೂ ಜ್ಞಾನವು ಬೇಕಾಗಿದ್ದರೆ ಅಂಥವರು ದೇವರಲ್ಲಿ
ಕೇಳಿಕೊಳ್ಳಲಿ. ದೇವರು ಉದಾರಿಯಾಗಿರುವುದರಿಂದ ಮತ್ತು
ಎಲ್ಲಾ ಜನರಿಗೆ ಸಂತೋಷದಿಂದ ಕೊಡುವುದರಿಂದ ನಿಮಗೆ
ಜ್ಞಾನವನ್ನು ದಯಪಾಲಿಸುತ್ತಾನೆ. 6ಆದರೆ ನೀವು ದೇವರನ್ನು
ಕೇಳಿಕೊಳ್ಳುವಾಗ ಆತನಲ್ಲಿ ನಿಮಗೆ ನಂಬಿಕೆಯಿರಬೇಕು.
ದೇವರ ಬಗ್ಗೆ ಸಂದೇಹಪಡದಿರಿ. ಸಂದೇಹಪಡುವವನು ಸಾಗರ
ದಲ್ಲಿನ ಅಲೆಯಂತಿದ್ದಾನೆ. ಗಾಳಿಯು ಬೀಸಿದಾಗ ಅಲೆಯು
ಮೇಲೆದ್ದು ಬೀಳುತ್ತದೆ. ಸಂದೇಹಪಡುವವನು ಆ ಅಲೆ
ಯಂತಿರುವನು. 7-8ಅವನು ಒಂದೇ ಕಾಲದಲ್ಲಿ ಎರಡು
ರೀತಿಯ ಸಂಗತಿಗಳನ್ನು ಯೋಚಿಸುತ್ತಾನೆ. ಅವನು ತಾನು
ಮಾಡುವ ಯಾವುದೇ ಕಾರ್ಯದಲ್ಲಾಗಲಿ ಒಂದು ತೀರ್ಮಾನಕ್ಕೆ
ಬರಲಾರನು. ಅಂಥವನು ತನಗೆ ಪ್ರಭುವಿನಿಂದ ಏನಾದರೂ
ದೊರೆಯುತ್ತದೆ ಎಂದು ಯೋಚಿಸದಿರಲಿ.

## ನಿಜ ಶ್ರೀಮಂತಿಕೆ

9ಬಡವನಾಗಿರುವ ವಿಶ್ವಾಸಿಯು ಹೆಮ್ಮೆಪಡಲಿ, ಏಕೆಂದರೆ
ದೇವರು ಅವನನ್ನು ಆತ್ಮಿಕ ವಿಷಯದಲ್ಲಿ ಐಶ್ವರ್ಯವಂತನನ್ನಾಗಿ
ಮಾಡಿದ್ದಾನೆ.

10ಐಶ್ವರ್ಯವಂತನಾಗಿರುವ ವಿಶ್ವಾಸಿಯೂ ಹೆಮ್ಮೆಪಡ
ಬೇಕು. ಏಕೆಂದರೆ ಆತ್ಮಿಕ ವಿಷಯದಲ್ಲಿ ಅವನಿಗಿರುವ ಬಡತನ
ವನ್ನು ದೇವರು ಅವನಿಗೆ ತೋರಿಸಿಕೊಟ್ಟಿದ್ದಾನೆ. ಐಶ್ವರ್ಯ
ವಂತನು ಹುಲ್ಲಿನ ಹೂವಿನಂತೆ ಗತಿಸುವನು. 11ಸೂರ್ಯನು
ಮೇಲೇರಿದಂತೆ ಬಿಸಿಲು ಹೆಚ್ಚಾಗುವುದು. ಸೂರ್ಯನ ತಾಪ
ದಿಂದ ಗಿಡಗಳು ಒಣಗಿಹೋಗುವವು; ಹೂವುಗಳು ಉದುರಿ
ಹೋಗುವವು. ಹೂವು ಸುಂದರವಾಗಿತ್ತು. ಆದರೆ ಈಗ ಅದು
ಒಣಗಿಹೋಯಿತು. ಐಶ್ವರ್ಯವಂತನಿಗೂ ಇದೇ ರೀತಿ
ಯಾಗುವುದು. ಅವನು ತನ್ನ ವ್ಯಾಪಾರದ ಬಗ್ಗೆ ಯೋಜನೆಗಳನ್ನು
ಮಾಡುತ್ತಿರುವಾಗಲೇ ಸತ್ತುಹೋಗುವನು.

## ಶೋಧನೆಯು ದೇವರಿಂದ ಬರುವುದಿಲ್ಲ

12ಶೋಧನೆಯನ್ನು ಎದುರಿಸುತ್ತಿದ್ದರೂ ದೃಢವಾಗಿರು
ವವನೇ ಧನ್ಯನು. ಏಕೆಂದರೆ ಅವನು ತನ್ನ ನಂಬಿಕೆಯನ್ನು
ನಿರೂಪಿಸಿದಾಗ, ಜೀವವೆಂಬ ಜಯಮಾಲೆಯನ್ನು ಹೊಂದು
ವನು. ದೇವರು ತನ್ನನ್ನು ಪ್ರೀತಿಸುವ ಜನರಿಗೆಲ್ಲರಿಗೂ ಇದನ್ನು
ವಾಗ್ದಾನ ಮಾಡಿದ್ದಾನೆ. 13ಶೋಧನೆಗೆ ಗುರಿಯಾಗಿರುವ
ವ್ಯಕ್ತಿಯು, ‘‘ದೇವರು ನನ್ನನ್ನು ಶೋಧಿಸುತ್ತಿದ್ದಾನೆ’’ ಎಂದು
ಹೇಳಬಾರದು. ಕೆಟ್ಟದ್ದು ದೇವರನ್ನು ಶೋಧಿಸಲಾರದು.
ದೇವರು ತಾನಾಗಿಯೇ ಯಾರನ್ನೂ ಶೋಧಿಸುವುದಿಲ್ಲ.
14ಶೋಧನೆಗೆ ಗುರಿಯಾಗಿರುವವನು ತಾನು ಇಷ್ಟಪಡುವ
ಕೆಟ್ಟಕಾರ್ಯಗಳಿಂದಲೇ ಶೋಧನೆಗೆ ಒಳಗಾಗಿದ್ದಾನೆ. ಅವನ
ಕೆಟ್ಟ ಆಸೆಗಳೇ ಅವನನ್ನು ದೂರ ಸೆಳೆದು, ಬಿಡದೆ ಹಿಡಿದು
ಕೊಳ್ಳುತ್ತವೆ. 15ಈ ಆಸೆಗಳು ಅವನಿಂದ ಪಾಪವನ್ನು ಮಾಡಿಸು
ತ್ತದೆ. ನಂತರ ಪಾಪವು ಬೆಳೆದು ಸಾವನ್ನು ತರುತ್ತದೆ.
16ನನ್ನ ಪ್ರಿಯ ಸಹೋದರ ಸಹೋದರಿಯರೇ, ಈ
ವಿಷಯದಲ್ಲಿ ನೀವು ಮೋಸಹೋಗಬೇಡಿರಿ. 17ಎಲ್ಲಾ ಒಳ್ಳೆಯ
ದಾನಗಳೂ ಕುಂದಿಲ್ಲದ ವರಗಳೂ, ಎಲ್ಲಾ ಬೆಳಕುಗಳಿಗೆ
(ಸೂರ್ಯ, ಚಂದ್ರ, ನಕ್ಷತ್ರಗಳು) ಮೂಲ ಕಾರಣನಾದ ಸೃಷ್ಟಿ
ಕರ್ತನಿಂದ ಬರುತ್ತವೆ. ದೇವರು ಬದಲಾಗುವುದಿಲ್ಲ. ಆತನು
ಎಲ್ಲಾ ಕಾಲದಲ್ಲಿಯೂ ಒಂದೇ ರೀತಿಯಲ್ಲಿರುತ್ತಾನೆ.
18ದೇವರು ಸತ್ಯವಾಕ್ಯದ ಮೂಲಕ ನಮಗೆ ಜೀವವನ್ನು ದಯ
ಪಾಲಿಸಲು ತೀರ್ಮಾನಿಸಿದ್ದಾನೆ. ತನ್ನಿಂದ ಸೃಷ್ಟಿಸಲ್ಪಟ್ಟ ಎಲ್ಲಾ
ವಸ್ತುಗಳಲ್ಲಿಯೂ ನಾವು ಅತ್ಯಂತ ಮುಖ್ಯರಾಗಬೇಕೆಂಬುದೇ
ಆತನ ಅಪೇಕ್ಷೆ.

## ಕೇಳುವಿಕೆ ಮತ್ತು ವಿಧೇಯತೆ

19ನನ್ನ ಸಹೋದರ ಸಹೋದರಿಯರೇ, ಯಾವಾಗಲೂ
ಮಾತನಾಡುವುದಕ್ಕಿಂತ ಕೇಳುವುದರಲ್ಲಿ ಆಸಕ್ತರಾಗಿರಿ.
ಸುಲಭವಾಗಿ ಕೋಪಗೊಳ್ಳದಿರಿ. 20ಒಬ್ಬ ವ್ಯಕ್ತಿಯ ಕೋಪವು
ದೇವರು ಅಪೇಕ್ಷಿಸಿದಂತೆ ಯೋಗ್ಯ ಜೀವನವನ್ನು ನಡೆಸಲು
ಅವನಿಗೆ ಸಹಾಯಕವಾಗುವುದಿಲ್ಲ. 21ಆದ್ದರಿಂದ ಎಲ್ಲಾ ನೀಚ
ತನವನ್ನೂ ದುಷ್ಟತನವನ್ನೂ ನಿಮ್ಮ ಜೀವನದಿಂದ ದೂರತಳ್ಳಿರಿ.
ನಿಮ್ಮ ಹೃದಯದಲ್ಲಿ ಬೇರೂರಿರುವ ದೇವರ ವಾಕ್ಯವನ್ನು ದೀನತೆ
ಯಿಂದ ಒಪ್ಪಿಕೊಳ್ಳಿರಿ. ಅದು ನಿಮ್ಮ ಆತ್ಮಗಳನ್ನು ರಕ್ಷಿಸುತ್ತದೆ.

22ದೇವರ ವಾಕ್ಯವನ್ನು ಕೇವಲ ಕೇಳುವವರಾಗಿರದೆ ಅದನ್ನು ಕಾರ್ಯರೂಪಕ್ಕೆ ತನ್ನಿರಿ. ಇಲ್ಲವಾದರೆ ನಿಮ್ಮನ್ನು ನೀವೇ ಮೋಸಗೊಳಿಸಿಕೊಳ್ಳುವಿರಿ. 23ದೇವರ ವಾಕ್ಯವನ್ನು ಕೇಳಿಯೂ ಅದರಂತೆ ನಡೆಯದವನು ಕನ್ನಡಿಯಲ್ಲಿ ತನ್ನ ಮುಖವನ್ನು ನೋಡಿಕೊಂಡವನಂತಿರುವನು. 24ಅವನು ಅಲ್ಲಿಂದ ಹೊರಟು ಹೋಗಿ, ತಾನು ಹೇಗಿದ್ದೇನೆಂಬುದನ್ನು ಬೇಗನೆ ಮರೆತು ಬಿಡುತ್ತಾನೆ. 25ಜನರನ್ನು ಬಿಡುಗಡೆ ಮಾಡುವ ದೇವರ ಪರಿಪೂರ್ಣ ನಿಯಮವನ್ನು ಎಚ್ಚರಿಕೆಯಿಂದ ಅಭ್ಯಾಸ ಮಾಡುವವನು ನಿಜವಾಗಿಯೂ ಸಂತೋಷಭರಿತನಾಗಿದ್ದಾನೆ. ಅವನು ಅದನ್ನು ಅಭ್ಯಾಸ ಮಾಡುತ್ತಲೇ ಇರುತ್ತಾನೆ. ಅವನು ದೇವರ ವಾಕ್ಯವನ್ನು ಕೇಳುತ್ತಾನೆ ಮತ್ತು ತಾನು ಕೇಳಿದುದನ್ನು ಮರೆತು ಬಿಡುವುದಿಲ್ಲ. ಅವನು ದೇವರ ವಾಕ್ಯಕ್ಕೆ ವಿಧೇಯನಾಗಿರುತ್ತಾನೆ. ಆದ್ದರಿಂದಲೇ ಅವನು ಸಂತೋಷಭರಿತನಾಗಿರುತ್ತಾನೆ.

### ದೇವರನ್ನು ಆರಾಧಿಸತಕ್ಕ ನಿಜವಾದ ಮಾರ್ಗ

26ಸದ್ಭಕ್ತನೆಂದು ತನ್ನ ಬಗ್ಗೆ ಹೇಳಿಕೊಳ್ಳುವವನು ತನ್ನ ನಾಲಿಗೆಗೆ ಕಡಿವಾಣವನ್ನು ಹಾಕದೆಹೋದರೆ ಅವನು ತನ್ನನ್ನು ತಾನೇ ಮೋಸಗೊಳಿಸಿಕೊಂಡಂತಾಗುವುದು. ಅವನ 'ಭಕ್ತಿ'ಗೆ ಬೆಲೆಯಿಲ್ಲ. 27ದೇವರು ಒಪ್ಪಿಕೊಳ್ಳುವ ಭಕ್ತಿಯು ಹೀಗಿದೆ: ಕೊರತೆಯಲ್ಲಿರುವ ಅನಾಥರನ್ನೂ ವಿಧವೆಯರನ್ನೂ ನೋಡಿಕೊಳ್ಳುವುದು ಮತ್ತು ಲೋಕದ ಕೆಟ್ಟತನದಿಂದ ಪ್ರಭಾವಿತರಾಗದಂತೆ ಅದರಿಂದ ದೂರವಿರುವುದು. ದೇವರು ಇಂಥ ಭಕ್ತಿಯನ್ನು ಪರಿಶುದ್ಧವಾದದ್ದೆಂದೂ ಒಳಿತಾದದ್ದೆಂದೂ ಪರಿಗಣಿಸಿ ಸ್ವೀಕರಿಸಿಕೊಳ್ಳುವನು.

### ಜನರೆಲ್ಲರನ್ನೂ ಪ್ರೀತಿಸಿ

2 ನನ್ನ ಪ್ರಿಯ ಸಹೋದರ ಸಹೋದರಿಯರೇ, ಮಹಿಮಾಪೂರ್ಣನಾದ ಪ್ರಭು ಯೇಸು ಕ್ರಿಸ್ತನಲ್ಲಿ ನೀವು ನಂಬಿಕೆಯಿಟ್ಟಿದ್ದೀರಿ. ಆದ್ದರಿಂದ ಕೆಲವರು ಇತರ ಜನರಿಗಿಂತ ಬಹಳ ಮುಖ್ಯರೆಂದು ಯೋಚಿಸಬೇಡಿ. 2ನಿಮ್ಮ ಸಭೆಗೆ ಒಬ್ಬನು ಬರುತ್ತಾನೆಂದು ನೆನೆಸಿರಿ. ಅವನು ಒಳ್ಳೆಯ ವಸ್ತ್ರಗಳನ್ನೂ ಬಂಗಾರದ ಉಂಗುರವನ್ನೂ ಧರಿಸಿರುತ್ತಾನೆ. ಅದೇ ಸಮಯಕ್ಕೆ ಕೊಳೆಯಾದ ಮತ್ತು ಹಳೆಯದಾದ ವಸ್ತ್ರಗಳನ್ನು ಧರಿಸಿರುವ ಒಬ್ಬ ಬಡವನೂ ಬರುತ್ತಾನೆ. 3ಒಳ್ಳೆಯ ವಸ್ತ್ರಗಳನ್ನು ಧರಿಸಿರುವವನಿಗೆ ವಿಶೇಷ ಗಮನವನ್ನು ನೀಡುವಿರಿ. ''ಉತ್ತಮವಾದ ಈ ಸ್ಥಳದಲ್ಲಿ ನೀವು ಕುಳಿತುಕೊಳ್ಳಿ'' ಎಂದು ಅವನಿಗೆ ಹೇಳುವಿರಿ. ಆದರೆ ಆ ಬಡ ಮನುಷ್ಯನಿಗೆ ''ಅಲ್ಲೇ ನಿಂತುಕೊ!'' ಎಂದಾಗಲಿ, ''ನಮ್ಮ ಪಾದಗಳ ಬಳಿ ನೆಲದ ಮೇಲೆ ಕುಳಿತುಕೊ!'' ಎಂದಾಗಲಿ ಹೇಳುವಿರಿ. 4ನೀವು ಮಾಡುತ್ತಿರುವುದೇನು? ಕೆಲವರನ್ನು ಇತರ ಜನರಿಗಿಂತ ಬಹಳ ಮುಖ್ಯರೆಂದು ಪರಿಗಣಿಸುತ್ತಿರುವಿರಿ. ನಿಮ್ಮ ಈ ತೀರ್ಪು ದುರುದ್ದೇಶದಿಂದ ಕೂಡಿರುತ್ತದೆ.

5ನನ್ನ ಪ್ರಿಯ ಸಹೋದರ ಸಹೋದರಿಯರೇ,ಕೇಳಿರಿ! ಈ ಲೋಕದಲ್ಲಿ ಬಡವರು ನಂಬಿಕೆಯಲ್ಲಿ ಶ್ರೀಮಂತರಾಗಿರಲೆಂದು ದೇವರು ಅವರನ್ನು ಆರಿಸಿಕೊಂಡಿದ್ದಾನೆ. ತನ್ನನ್ನು ಪ್ರೀತಿಸುವ ಜನರಿಗೆ ದೇವರು ವಾಗ್ದಾನಮಾಡಿದ ರಾಜ್ಯವನ್ನು ಹೊಂದಿಕೊಳ್ಳಲು ಆತನು ಅವರನ್ನು ಆರಿಸಿಕೊಂಡಿದ್ದಾನೆ. 6ಆದರೆ ಬಡವನಿಗೆ ನೀವು ಗೌರವವನ್ನೇ ತೋರುವುದಿಲ್ಲ. ಶ್ರೀಮಂತ ಜನರು ಯಾವಾಗಲೂ ನಿಮ್ಮ ಬದುಕನ್ನು ತಮ್ಮ ಹಿಡಿತದಲ್ಲಿ ಇಟ್ಟುಕೊಂಡಿದ್ದಾರೆಂಬುದು ನಿಮಗೆ ತಿಳಿದದೆ. ನಿಮ್ಮನ್ನು ನ್ಯಾಯಾಲಯಕ್ಕೆ ಕೊಂಡೊಯ್ಯುವವರು ಅವರೇ. 7ನಿಮ್ಮನ್ನು ತನ್ನವರನ್ನಾಗಿ ಮಾಡಿಕೊಂಡಿರುವ ಯೇಸುವಿನ ಶ್ರೇಷ್ಠವಾದ ಹೆಸರಿಗೆ ವಿರುದ್ಧವಾಗಿ ಕೆಟ್ಟಮಾತುಗಳನ್ನು ಆಡುವವರು ಶ್ರೀಮಂತರೇ.

8ಪವಿತ್ರ ಗ್ರಂಥದಲ್ಲಿ ಬರೆದಿರುವ, ''ನಿನ್ನನ್ನು ಪ್ರೀತಿಸುವಂತೆ ಇತರರನ್ನೂ ಪ್ರೀತಿಸು''* ಎಂಬ ರಾಜಾಜ್ಞೆಗೆ ನೀವು ವಿಧೇಯರಾಗಿದ್ದರೆ ಸರಿಯಾದುದನ್ನೇ ಮಾಡುವವರಾಗಿದ್ದೀರಿ. 9ಆದರೆ ನೀವು ಒಬ್ಬನನ್ನು ಇನ್ನೊಬ್ಬನಿಗಿಂತ ಮುಖ್ಯನೆಂದು ಪರಿಗಣಿಸಿ ಪಕ್ಷಪಾತ ಮಾಡಿದರೆ ಪಾಪವನ್ನು ಮಾಡುವವರಾಗಿದ್ದೀರಿ. ದೇವರ ಧರ್ಮಶಾಸ್ತ್ರವನ್ನು ಉಲ್ಲಂಘಿಸಿ ದೋಷಿಗಳಾಗಿದ್ದೀರೆಂದು ಆ ರಾಜಾಜ್ಞೆಯು ನಿರೂಪಿಸುತ್ತದೆ. 10ಒಬ್ಬನು ದೇವರ ಎಲ್ಲಾ ಆಜ್ಞೆಗಳನ್ನು ಅನುಸರಿಸುತ್ತಿರಬಹುದು. ಆದರೆ ಅವನು ಒಂದು ಆಜ್ಞೆಗೆ ಅವಿಧೇಯನಾದರೆ ಅವನು ಧರ್ಮಶಾಸ್ತ್ರದ ಎಲ್ಲಾ ಆಜ್ಞೆಗಳನ್ನು ಮೀರಿದನೆಂಬ ಅಪರಾಧಕ್ಕೆ ಗುರಿಯಾಗುವನು. 11''ವ್ಯಭಿಚಾರ ಮಾಡಬಾರದು''* ಎಂದು ದೇವರು ಹೇಳಿದನು. ''ಕೊಲ್ಲಬಾರದು''* ಎಂದೂ ಅದೇ ದೇವರು ಹೇಳಿದನು. ಹೀಗಿರಲಾಗಿ, ನೀವು ವ್ಯಭಿಚಾರವನ್ನು ಮಾಡದಿದ್ದರೂ ಯಾರನ್ನೇ ಆಗಲಿ ಕೊಂದರೆ, ದೇವರ ಇಡೀ ಧರ್ಮಶಾಸ್ತ್ರವನ್ನೇ ಉಲ್ಲಂಘಿಸಿದವರಾಗಿದ್ದೀರಿ. 12ಜನರನ್ನು ಬಿಡುಗಡೆ ಮಾಡುವ ಧರ್ಮಶಾಸ್ತ್ರದಿಂದಲೇ ನಿಮಗೆ ತೀರ್ಪಾಗುವುದು. ನೀವು ಕೇಳುವ ಮತ್ತು ಮಾಡುವ ಪ್ರತಿಯೊಂದರಲ್ಲಿಯೂ ಇದನ್ನು ನೆನಪಿನಲ್ಲಿಟ್ಟುಕೊಳ್ಳಿ. 13ಹೌದು, ಇತರರಿಗೆ ನೀವು ಕರುಣೆ ತೋರಬೇಕು. ಇಲ್ಲವಾದರೆ ದೇವರು ತೀರ್ಪು ನೀಡುವಾಗ ನಿಮಗೂ ಕರುಣೆ ತೋರನು.ಕರುಣೆ ತೋರುವವನು ದೇವರ ನ್ಯಾಯತೀರ್ಪಿನಲ್ಲಿ ಭಯವಿಲ್ಲದೆ ಇರುವನು.

### ನಂಬಿಕೆ ಮತ್ತು ಉತ್ತಮ ಕಾರ್ಯಗಳು

14ನನ್ನ ಸಹೋದರ ಸಹೋದರಿಯರೇ, ಒಬ್ಬ ವ್ಯಕ್ತಿಯು ತನ್ನಲ್ಲಿ ನಂಬಿಕೆಯಿದೆಯೆಂದು ಹೇಳಿಕೊಂಡರೂ ಅದನ್ನು ಕಾರ್ಯರೂಪಕ್ಕೆ ತರದಿದ್ದರೆ, ಅವನ ನಂಬಿಕೆಯಿಂದ ಪ್ರಯೋಜನವೇನೂ ಇಲ್ಲ. ಆ ರೀತಿಯ ನಂಬಿಕೆಯು ಅವನನ್ನು ರಕ್ಷಿಸಬಲ್ಲದೇ? ಇಲ್ಲ! 15ಕ್ರಿಸ್ತನಲ್ಲಿ ಸಹೋದರನಾಗಿರುವವನಿಗೆ ಅಥವಾ ಸಹೋದರಿಯಾಗಿರುವವಳಿಗೆ ಬಟ್ಟೆಗಳು ಬೇಕಾಗಿರಬಹುದು ಅಥವಾ ತಿನ್ನಲು ಆಹಾರ ಬೇಕಾಗಿರಬಹುದು. 16ಆದರೆ ನೀವು ಆ ವ್ಯಕ್ತಿಗೆ, ''ದೇವರು ನಿನ್ನೊಂದಿಗಿರಲಿ! ಚಳಿಕಾಯಿಸಿಕೊಂಡು ತೃಪ್ತಿಯಾಗುವಷ್ಟು ಊಟಮಾಡು'' ಎಂಬುದಾಗಿ ಹೇಳಿ ಬೇಕಾದವುಗಳನ್ನು ಅವನಿಗೆ ಕೊಡದೆ ಹೋದರೆ ನಿಮ್ಮ ಮಾತುಗಳಿಗೆ ಯಾವ ಬೆಲೆಯೂ ಇಲ್ಲ. 17ಇದೇ ನಿಯಮ ನಂಬಿಕೆಗೂ ಅನ್ವಯಿಸುತ್ತದೆ. ಕ್ರಿಯೆಯಿಲ್ಲದ ನಂಬಿಕೆಯು ತನ್ನಲ್ಲಿಯೇ ಸತ್ತುಹೋಗಿದೆ.

---

**ನಿನ್ನನ್ನು ... ಪ್ರೀತಿಸು** ಯಾಜಕ. 19:18.

**ವ್ಯಭಿಚಾರ ... ಮಾಡಬಾರದು** ವಿಮೋಚನ. 20:14; ಧರ್ಮೋಪದೇಶ. 5:18.

**ಕೊಲ್ಲಬಾರದು** ವಿಮೋಚನ. 20:13; ಧರ್ಮೋಪದೇಶ. 5:17.

18ಹೀಗಲ್ಲವಾದರೆ ಯಾವನಾದರೂ, ‘‘ನಿನ್ನಲ್ಲಿ ನಂಬಿಕೆ
ಯಿದೆ. ನನ್ನಲ್ಲಿ ಕ್ರಿಯೆಗಳಿವೆ. ನಿನ್ನ ನಂಬಿಕೆಯನ್ನು ತೋರಿಸು!
ನಿನ್ನ ನಂಬಿಕೆ ಯಾವ ಕಾರ್ಯವನ್ನೂ ಮಾಡುತ್ತಿಲ್ಲ. ನಾನಾ
ದರೊ ನನ್ನ ನಂಬಿಕೆಯನ್ನು ನಾನು ಮಾಡುವ ಕಾರ್ಯಗಳಲ್ಲಿ
ನಿನಗೆ ತೋರಿಸುವೆ’’ ಎಂದು ಹೇಳಬಹುದು. 19ಒಬ್ಬನೇ
ದೇವರಿರುವನೆಂದು ನೀವು ನಂಬಿದ್ದೀರಿ. ಒಳ್ಳೆಯದು! ಆದರೆ
ದೆವ್ವಗಳೂ ಅದನ್ನು ನಂಬುತ್ತವೆ ಮತ್ತು ಭಯದಿಂದ ನಡುಗು
ತ್ತವೆ. 20ಬುದ್ಧಿಹೀನರೇ, ಕ್ರಿಯೆಯಿಲ್ಲದ ನಂಬಿಕೆಯು ನಿಷ್ಪ್ರ
ಯೋಜಕವೆಂದು ನಿಮಗೆ ತೋರಿಸಬೇಕೋ? 21ಅಬ್ರ
ಹಾಮನು ನಮ್ಮ ಪಿತೃ. ಅವನು ತನ್ನ ಕ್ರಿಯೆಗಳಿಂದ ನೀತಿವಂತ
ನಾದನು. ಅವನು ಯಜ್ಞವೇದಿಕೆಯ ಮೇಲೆ ತನ್ನ ಮಗನಾದ
ಇಸಾಕನನ್ನು ದೇವರಿಗೆ ಅರ್ಪಿಸಿದನು. 22ಆದುದರಿಂದ ಅವನ
ನಂಬಿಕೆ ಮತ್ತು ಅವನ ಕ್ರಿಯೆ ಒಟ್ಟಿಗೆ ಕಾರ್ಯ ಮಾಡಿದವು.
ಅವನ ನಂಬಿಕೆಯು ಅವನ ಕ್ರಿಯೆಗಳಿಂದಲೇ ಪರಿಪೂರ್ಣ
ಗೊಂಡಿತು. 23ಹೀಗೆ ಪವಿತ್ರ ಗ್ರಂಥದ ಈ ಮಾತುಗಳು
ನೆರವೇರಿದವು: ‘‘ಅಬ್ರಹಾಮನು ದೇವರನ್ನು ನಂಬಿದನು.
ದೇವರು ಅಬ್ರಹಾಮನ ನಂಬಿಕೆಯನ್ನು ಒಪ್ಪಿಕೊಂಡು
ಅವನನ್ನು ನೀತಿವಂತನೆಂದು ಪರಿಗಣಿಸಿದನು.’’ * ಅಬ್ರಹಾಮ
ನನ್ನು ‘‘ದೇವರ ಸ್ನೇಹಿತ’’ *ನೆಂದು ಕರೆಯಲಾಯಿತು.
24ಹೀಗಿರಲು ಒಬ್ಬನು ತನ್ನ ಕ್ರಿಯೆಗಳಿಂದ ನೀತಿವಂತ
ನಾಗುತ್ತಾನೆ ಎಂಬುದು ಸ್ಪಷ್ಟವಾಗಿದೆ. ಒಬ್ಬನು ಕೇವಲ ನಂಬಿಕೆ
ಯೊಂದರಿಂದಲೇ ನೀತಿವಂತನಾಗಲು ಸಾಧ್ಯವಿಲ್ಲ.

25ರಹಾಬಳು ಮತ್ತೊಬ್ಬ ಉದಾಹರಣೆಯಾಗಿದ್ದಾಳೆ. ಆಕೆ
ಒಬ್ಬ ವೇಶ್ಯೆ. ಆದರೆ ಅವಳು ತನ್ನ ಕ್ರಿಯೆಗಳಿಂದಲೇ ನೀತಿವಂತ
ಳಾದಳು. ಅವಳು ದೇವರ ಜನರಿಗೋಸ್ಕರ ಗೂಢಚಾರರನ್ನು
ತನ್ನ ಮನೆಗೆ ಬರಮಾಡಿಕೊಂಡು, ಬೇರೊಂದು ರಸ್ತೆಯಲ್ಲಿ
ತಪ್ಪಿಸಿಕೊಂಡು ಹೋಗಲು ಅವರಿಗೆ ಸಹಾಯ ಮಾಡಿದಳು. *
26ಒಬ್ಬ ವ್ಯಕ್ತಿಯ ದೇಹದಲ್ಲಿ ಆತ್ಮವಿಲ್ಲದಿದ್ದರೆ, ಅವನ
ದೇಹವು ಸತ್ತದ್ದೇ. ಅದೇ ರೀತಿಯಲ್ಲಿ ಕ್ರಿಯೆಯಿಲ್ಲದ
ನಂಬಿಕೆಯು ಸತ್ತದ್ದೇ.

## ಹತೋಟಿಮೀರಿ ಮಾತಾಡಬೇಡಿ

3 ನನ್ನ ಸಹೋದರ ಸಹೋದರಿಯರೇ, ನಿಮ್ಮಲ್ಲಿ ಅನೇಕರು
ಬೋಧಕರಾಗಬಾರದು. ಏಕೆಂದರೆ ಬೋಧಕರಾದ
ನಮಗೆ ಇತರ ಜನರಿಗಿಂತ ಕಠಿಣವಾದ ತೀರ್ಪಾಗುತ್ತದೆ
ಎಂಬುದು ನಿಮಗೆ ತಿಳಿದದೆ. 2ನಾವೆಲ್ಲರೂ ಅನೇಕ ವಿಷಯ
ಗಳಲ್ಲಿ ತಪ್ಪುವುದುಂಟು. ಆದರೆ ಮಾತಿನಲ್ಲಿ ತಪ್ಪದವನು
ಶಿಕ್ಷಿತನೂ ತನ್ನ ದೇಹವನ್ನು ಸ್ವಾಧೀನದಲ್ಲಿಟ್ಟುಕೊಳ್ಳಲು
ಸಮರ್ಥನೂ ಆಗಿದ್ದಾನೆ. 3ನಾವು ಕುದುರೆಗಳನ್ನು ಸ್ವಾಧೀನ
ಪಡಿಸಿಕೊಳ್ಳಲು ಅವುಗಳ ಬಾಯಿಗೆ ಕಡಿವಾಣ ಹಾಕುತ್ತೇವಲ್ಲಾ;
ಆಗ ಅವುಗಳ ದೇಹವನ್ನೆಲ್ಲಾ ಸ್ವಾಧೀನ ಪಡಿಸಿಕೊಳ್ಳಬಹುದು.
4ಇದೇ ನಿಯಮ ಹಡಗುಗಳಿಗೂ ಅನ್ವಯಿಸುತ್ತದೆ. ಹಡಗು
ಬಹಳ ದೊಡ್ಡದಾಗಿರುತ್ತದೆ ಮತ್ತು ಬಲವಾದ ಗಾಳಿಯು
ಅದನ್ನು ತಳ್ಳಿಕೊಂಡು ಹೋಗುತ್ತದೆ. ಆದರೆ ಒಂದು ಸಣ್ಣ
ಚುಕ್ಕಾಣಿಯು ಆ ದೊಡ್ಡ ಹಡಗನ್ನು ನಿಯಂತ್ರಿಸುತ್ತದೆ.
ಚುಕ್ಕಾಣಿಯನ್ನು ಹತೋಟಿಯಲ್ಲಿ ಇಟ್ಟುಕೊಂಡಿರುವವನು
ಹಡಗು ಹೋಗಬೇಕಾದ ಮಾರ್ಗವನ್ನು ತೀರ್ಮಾನಿಸುತ್ತಾನೆ.
ಅವನ ಅಪೇಕ್ಷೆಯಂತೆ ಹಡಗು ಹೋಗುತ್ತದೆ. 5ನಮ್ಮ
ನಾಲಿಗೆಯೂ ಅದರಂತೆಯೆ. ಅದು ದೇಹದ ಒಂದು ಸಣ್ಣ
ಭಾಗವಾದರೂ, ದೊಡ್ಡ ಕಾರ್ಯಗಳನ್ನು ಕೊಚ್ಚಿಕೊಳ್ಳುತ್ತದೆ.

ಒಂದು ಚಿಕ್ಕ ಬೆಂಕಿಯ ಕಿಡಿಯು ದೊಡ್ಡ ಕಾಡ್ಗಿಚ್ಚಿಗೆ ಕಾರಣ
ವಾಗುತ್ತದೆ. 6ನಾಲಿಗೆಯು ಬೆಂಕಿಯ ಕಿಡಿಯಂತೆ ನಮ್ಮ ದೇಹದ
ಭಾಗಗಳಲ್ಲಿ ಅದು ಕೆಟ್ಟ ಲೋಕದಂತಿದೆ. ಹೇಗೆಂದರೆ,
ನಾಲಿಗೆಯು ನಮ್ಮ ದೇಹದಲ್ಲೆಲ್ಲಾ ಕೆಟ್ಟತನವನ್ನು ಹರಡುತ್ತದೆ.
ನಮ್ಮ ಜೀವಿತದ ಮೇಲೆಲ್ಲಾ ಪ್ರಭಾವ ಬೀರುವ ಬೆಂಕಿಯನ್ನು
ಅದು ನರಕದಿಂದ ಪಡೆದು ಹೊತ್ತಿಸುತ್ತದೆ. 7ಜನರು ಎಲ್ಲಾ ವಿಧ
ವಾದ ಕಾಡುಮೃಗ, ಪಕ್ಷಿ, ಸರ್ಪ, ಮೀನುಗಳನ್ನು ಹತೋಟಿಗೆ
ತರುತ್ತಾರೆ. ಜನರು ಈಗಾಗಲೇ ಇವುಗಳನ್ನು ಹತೋಟಿಗೆ
ತಂದಿದ್ದಾರೆ. 8ಆದರೆ ಯಾರೂ ನಾಲಿಗೆಯನ್ನು ಹತೋಟಿಗೆ
ತಂದಿಲ್ಲ. ಅದು ಕ್ರೂರವಾದದ್ದೂ ಕೆಟ್ಟದ್ದೂ ಆಗಿದೆ. ಅದು
ಮರಣಕರವಾದ ವಿಷವನ್ನು ತುಂಬಿಕೊಂಡಿದೆ. 9ನಮ್ಮ ಪ್ರಭು
ವನ್ನು ಮತ್ತು ತಂದೆಯನ್ನು (ದೇವರು) ಸ್ತುತಿಸಲು ನಮ್ಮ ನಾಲಿಗೆ
ಯನ್ನು ಬಳಸುತ್ತೇವೆ; ಆದರೆ ಅದರಿಂದಲೇ ಜನರನ್ನು
ಶಪಿಸುತ್ತೇವೆ. ದೇವರು ಆ ಜನರನ್ನೂ ತನ್ನ ಹೋಲಿಕೆಗನು
ಸಾರವಾಗಿ ಸೃಷ್ಟಿಸಿದ್ದಾನೆ. 10ಹೊಗಳಿಕೆ ಮತ್ತು ತೆಗಳಿಕೆಗಳೆರಡೂ
ಒಂದೇ ಬಾಯಿಂದ ಬರುತ್ತವೆ! ನನ್ನ ಸಹೋದರ ಸಹೋದರಿ
ಯರೇ, ಇದು ಸಂಭವಿಸಲೇಬಾರದು. 11ಸಿಹಿಯಾದ ನೀರು
ಮತ್ತು ಕಹಿಯಾದ ನೀರು ಒಂದೇ ಬುಗ್ಗೆಯಿಂದ ಹರಿಯು
ತ್ತವೆಯೋ? ಇಲ್ಲ! 12ನನ್ನ ಸಹೋದರ ಸಹೋದರಿಯರೇ,
ಅಂಜೂರದ ಮರವು ಆಲಿವ್ ಕಾಯಿಗಳನ್ನು ಬಿಡುವುದೇ?
ಇಲ್ಲ! ದ್ರಾಕ್ಷೆಬಳ್ಳಿಯು ಅಂಜೂರದ ಹಣ್ಣನ್ನು ಬಿಡುವುದೇ?
ಇಲ್ಲ! ಉಪ್ಪು ನೀರಿನಿಂದ ತುಂಬಿದ ಬಾವಿಯು ಸಿಹಿ ನೀರನ್ನು
ಕೊಡುವುದಿಲ್ಲ.

## ನಿಜವಾದ ಜ್ಞಾನ

13ನಿಮ್ಮಲ್ಲಿ ಜ್ಞಾನವಂತರಾಗಲಿ ಬುದ್ಧಿವಂತರಾಗಲಿ
ಇದ್ದಾರೋ? ಅಂಥವನು ತನ್ನ ಜ್ಞಾನವನ್ನು ಯೋಗ್ಯವಾಗಿ
ಬದುಕುವುದರ ಮೂಲಕ ತೋರ್ಪಡಿಸಲಿ. ಅವನು ಒಳ್ಳೆಯ
ಕಾರ್ಯಗಳನ್ನು ದೀನತೆಯಿಂದ ಮಾಡಲಿ. ಜ್ಞಾನಿಯಾದವನು
ಕೊಚ್ಚಿಕೊಳ್ಳುವುದಿಲ್ಲ. 14ನೀವು ಸ್ವಾರ್ಥಿಗಳೂ ತೀಕ್ಷ್ಣವಾದ
ಮತ್ಸರವನ್ನು ಹೃದಯದಲ್ಲಿ ಹೊಂದಿರುವವರೂ ಆಗಿದ್ದರೆ,
ನೀವು ಕೊಚ್ಚಿಕೊಳ್ಳುವುದರಲ್ಲಿ ಅರ್ಥವೇ ಇಲ್ಲ. ಏಕೆಂದರೆ ಅದು
ಕೇವಲ ಸುಳ್ಳಷ್ಟೇ. 15ಇಂಥ ‘‘ಜ್ಞಾನ’’ವು ದೇವರಿಂದ ಬರದೆ
ಲೋಕದಿಂದ ಬರುತ್ತದೆ. ಅದು ಆತ್ಮ ಸಂಬಂಧವಾದುದಲ್ಲ,
ಅದು ದೆವ್ವಗಳಿಂದ ಬಂದುದು. 16ಹೊಟ್ಟೆಕಿಚ್ಚು ಮತ್ತು ಸ್ವಾರ್ಥತೆ
ಗಳು ಎಲ್ಲಿರುವವೋ ಅಲ್ಲಿ ಗಲಿಬಿಲಿಯೂ ಎಲ್ಲಾ ಬಗೆಯ
ನೀಚತನಗಳೂ ಇರುತ್ತವೆ. 17ಆದರೆ ದೇವರಿಂದ ಬರುವ
ಜ್ಞಾನವು ಹೀಗಿರುತ್ತದೆ: ಮೊದಲನೆಯದಾಗಿ ಅದು ಪರಿಶುದ್ಧ
ವಾದದ್ದು. ಅದು ಶಾಂತಿದಾಯಕವಾದದ್ದು, ಸಾತ್ವಿಕವಾದದ್ದು

---

**ಅಬ್ರಹಾಮನು … ಪರಿಗಣಿಸಿದನು** ಆದಿಕಾಂಡ 15:6.

**ದೇವರ ಸ್ನೇಹಿತ** 2 ಪೂರ್ವಕಾಲವೃತ್ತಾಂತ 20:7; ಯೆಶಾಯ 41:8.

**ರಹಾಬಳು … ಮಾಡಿದಳು** ಚರಿತ್ರೆಯ ಈ ಘಟನೆಯು ಯೆಹೋಶುವನ ಗ್ರಂಥ 2:1-21ರಲ್ಲಿದೆ.

ಮತ್ತು ಸುಲಭವಾಗಿ ಮೆಚ್ಚಿಕೊಳ್ಳುವಂಥದ್ದು. ಈ ಜ್ಞಾನವು
ತೊಂದರೆಯಲ್ಲಿರುವ ಜನರಿಗೆ ಸಹಾಯ ಮಾಡಲು ಮತ್ತು
ಇತರ ಜನರಿಗೆ ಒಳ್ಳೆಯದನ್ನು ಮಾಡಲು ಯಾವಾಗಲೂ ಸಿದ್ಧ
ವಾಗಿರುತ್ತದೆ. ಈ ಜ್ಞಾನವು ಯಾವಾಗಲೂ ನ್ಯಾಯವಾದದ್ದು
ಮತ್ತು ಯಥಾರ್ಥವಾದದ್ದು. 18ಶಾಂತಿ ಸ್ಥಾಪಿಸುವುದಕ್ಕಾಗಿ
ಸಮಾಧಾನಕರವಾದ ರೀತಿಯಲ್ಲಿ ಕಾರ್ಯ ಮಾಡುವವರು
ಯೋಗ್ಯವಾದ ಬದುಕಿನಿಂದ ಬರುವ ಉತ್ತಮ ಫಲಗಳನ್ನು
ಪಡೆಯುತ್ತಾರೆ.

### ದೇವರಿಗೆ ನಿಮ್ಮನ್ನು ಒಪ್ಪಿಸಿಕೊಳ್ಳಿ

4 ನಿಮ್ಮ ಹೋರಾಟಗಳು ಮತ್ತು ವಾದವಿವಾದಗಳು ಎಲ್ಲಿಂದ
ಬರುತ್ತವೆಯೆಂಬುದು ನಿಮಗೆ ತಿಳಿದಿದೆಯೋ? ನಿಮ್ಮ
ಸ್ವಾರ್ಥಪರ ಆಸೆಗಳಿಂದ ನಿಮ್ಮ ಹೋರಾಟಗಳು ಮತ್ತು ವಾದ
ವಿವಾದಗಳು ಬರುತ್ತವೆ. ಅವು ನಿಮ್ಮ ಅಂತರಂಗದಲ್ಲಿ ಯುದ್ಧ
ಮಾಡುತ್ತಿವೆ. 2ನೀವು ಅನೇಕ ವಸ್ತುಗಳಿಗಾಗಿ ಆಶಿಸುತ್ತೀರಿ.
ಆದರೆ ಅವುಗಳನ್ನು ಪಡೆಯುವುದರಲ್ಲಿ ವಿಫಲರಾಗುತ್ತೀರಿ.
ಆದುದರಿಂದ ನೀವು ಕೊಲೆ ಮಾಡುತ್ತೀರಿ ಮತ್ತು ಇತರರ ಬಗ್ಗೆ
ಅಸೂಯೆಪಡುತ್ತೀರಿ. ಆದರೆ ನೀವು ಆಸೆಪಟ್ಟದ್ದನ್ನು ಇನ್ನೂ
ಪಡೆಯಲಾರದವರಾಗಿರುವಿರಿ. ಆದುದರಿಂದ ನೀವು ವಾದ
ವಿವಾದ ಮಾಡುವಿರಿ ಮತ್ತು ಹೊಡೆದಾಡುವಿರಿ. ನೀವು
ದೇವರನ್ನು ಕೇಳಿಕೊಳ್ಳಲಿಲ್ಲ. ಆದ್ದರಿಂದಲೇ, ನೀವು ಆಸೆ
ಪಟ್ಟದ್ದು ನಿಮಗೆ ದೊರೆಯಲಿಲ್ಲ. 3ಮತ್ತು ನೀವು ಕೇಳಿ
ಕೊಂಡಾಗ ನಿಮಗೆ ಅವು ಸಿಗಲಿಲ್ಲ. ಏಕೆಂದರೆ ನಿಮ್ಮ ಉದ್ದೇಶವು
ಸರಿಯಾಗಿರಲಿಲ್ಲ. ನೀವು ಅವುಗಳನ್ನು ಕೇವಲ ನಿಮ್ಮ ಸ್ವಂತ
ಸುಖಕ್ಕಾಗಿ ಕೇಳಿಕೊಂಡಿರಿ. 4ಆದ್ದರಿಂದ ನೀವು ದೇವರಿಗೆ
ನಂಬಿಗಸ್ತರಾಗಿಲ್ಲ! ಇಹಲೋಕದ ಮೇಲಿರುವ ವ್ಯಾಮೋಹ
ದೇವರ ಮೇಲಿರುವ ದ್ವೇಷಕ್ಕೆ ಸಮಾನವಾಗಿದೆ. ಆದುದರಿಂದ
ಈ ಲೋಕವನ್ನು ಪ್ರೀತಿಸುವವನು ತನ್ನನ್ನು ದೇವರಿಗೆ ಶತ್ರು
ವನ್ನಾಗಿ ಮಾಡಿಕೊಳ್ಳುತ್ತಾನೆ. 5ಪವಿತ್ರ ಗ್ರಂಥವು ಅರ್ಥವಿಲ್ಲ
ದ್ದೆಂದು ಯೋಚಿಸುವಿರಾ? ‘‘ದೇವರು ನಮ್ಮಲ್ಲಿ ಇರಿಸಿರುವ
ಆತ್ಮದ ಅಪೇಕ್ಷೆಯೇನೆಂದರೆ, ನಾವು ಆತನಿಗೋಸ್ಕರ ಮಾತ್ರ ಇರ
ಬೇಕೆಂದಷ್ಟೇ’’ * ಎಂದು ಪವಿತ್ರ ಗ್ರಂಥವು ಹೇಳುತ್ತದೆ. 6ಆದರೆ
ದೇವರು ದಯಪಾಲಿಸಿದ ಕೃಪೆಯು ಅದಕ್ಕಿಂತಲೂ ಹೆಚ್ಚಿನದು.
ಪವಿತ್ರಗ್ರಂಥವು ಹೇಳುವಂತೆ, ‘‘ದೇವರು ಅಹಂಕಾರಿಗಳಿಗೆ
ವಿರುದ್ಧವಾಗಿರುತ್ತಾನೆ, ದೀನರಿಗಾದರೆ ಕೃಪೆಯನ್ನು ದಯ
ಪಾಲಿಸುತ್ತಾನೆ.’’ * 7ಆದ್ದರಿಂದ ದೇವರಿಗೆ ನಿಮ್ಮನ್ನು ಒಪ್ಪಿಸಿ
ಕೊಂಡು ಸೈತಾನನನ್ನು ಎದುರಿಸಿರಿ. ಆಗ ಅವನು ನಿಮ್ಮಿಂದ
ದೂರ ಓಡಿಹೋಗುತ್ತಾನೆ. 8ದೇವರ ಸಮೀಪಕ್ಕೆ ಬನ್ನಿ, ಆಗ
ದೇವರು ನಿಮ್ಮ ಸಮೀಪಕ್ಕೆ ಬರುತ್ತಾನೆ. ನೀವು ಪಾಪಿಗಳು. ಆದು
ದರಿಂದ ನಿಮ್ಮ ಜೀವಿತಗಳಿಂದ ಪಾಪಗಳನ್ನು ತೊಳೆದುಹಾಕಿರಿ.
ನೀವು ದೇವರನ್ನು ಮತ್ತು ಈ ಲೋಕವನ್ನು ಏಕಕಾಲದಲ್ಲಿ ಅನು
ಸರಿಸಲು ಪ್ರಯತ್ನಿಸುತ್ತಿರುವಿರಿ. ನಿಮ್ಮ ಆಲೋಚನೆಗಳನ್ನು
ಪರಿಶುದ್ಧಗೊಳಿಸಿರಿ. 9ದುಃಖಪಡಿರಿ, ಗೋಳಾಡಿರಿ, ಕಣ್ಣೀರನ್ನು
ಸುರಿಸಿ! ನಗುವುದನ್ನು ಬಿಟ್ಟು ಗೋಳಾಡಿರಿ. ಸಂತೋಷಿಸು
ವುದನ್ನು ಬಿಟ್ಟು ವ್ಯಸನಪಡಿರಿ. 10ಪ್ರಭುವಿನ ಎದುರಿನಲ್ಲಿ
ದೀನರಾಗಿರಿ, ಆತನು ನಿಮ್ಮನ್ನು ಉನ್ನತಮಟ್ಟಕ್ಕೆ ತರುತ್ತಾನೆ.

### ನೀವು ತೀರ್ಪುಗಾರರಲ್ಲ

11ಸಹೋದರ ಸಹೋದರಿಯರೇ, ಒಬ್ಬರ ವಿರುದ್ಧ
ಮತ್ತೊಬ್ಬರು ನಿಂದೆಯ ಮಾತುಗಳನ್ನಾಡದಿರಿ. ಕ್ರಿಸ್ತನಲ್ಲಿ ನಿಮ್ಮ
ಸಹೋದರನಾಗಿರುವವನನ್ನು ನೀವು ಟೀಕಿಸಿದರೆ ಅಥವಾ
ಅವನ ಬಗ್ಗೆ ತೀರ್ಪು ನೀಡಿದರೆ, ಅವನು ಅನುಸರಿಸುವ ಧರ್ಮ
ಶಾಸ್ತ್ರವನ್ನೇ ಟೀಕಿಸಿದಂತಾಯಿತು. ಕ್ರಿಸ್ತನಲ್ಲಿ ಸಹೋದರ
ನಾಗಿರುವವನಿಗೆ ನೀವು ತೀರ್ಪು ನೀಡಿದರೆ, ಅವನು ಅನುಸರಿಸು
ತ್ತಿರುವ ಧರ್ಮಶಾಸ್ತ್ರದ ಬಗ್ಗೆ ನೀವು ತೀರ್ಪು ನೀಡಿದಂತಾಯಿತು.
ನೀವು ಧರ್ಮಶಾಸ್ತ್ರಕ್ಕೆ ತೀರ್ಪು ನೀಡುವಾಗ ನೀವು ಧರ್ಮಶಾಸ್ತ್ರ
ವನ್ನು ಅನುಸರಿಸುವವರಲ್ಲ. ನೀವು ನ್ಯಾಯಾಧಿಪತಿಗಳಾಗಿ
ದ್ದೀರಿ! 12ದೇವರೊಬ್ಬನೇ ನಿಯಮಗಳನ್ನು ಮಾಡುವಾತನು.
ಆತನೊಬ್ಬನೇ ನಿಜವಾದ ನ್ಯಾಯಾಧಿಪತಿ. ದೇವರೊಬ್ಬನೇ
ರಕ್ಷಿಸಬಲ್ಲನು ಮತ್ತು ನಾಶಮಾಡಬಲ್ಲನು. ಆದುದರಿಂದ
ಬೇರೊಬ್ಬ ವ್ಯಕ್ತಿಯ ಬಗ್ಗೆ ತೀರ್ಪು ನೀಡುವುದು ನಿನಗೆ
ಯೋಗ್ಯವಾದುದಲ್ಲ.

### ದೇವರೇ ನಿನ್ನ ಜೀವನದ ಬಗ್ಗೆ ಯೋಚಿಸಲಿ

13ನಿಮ್ಮಲ್ಲಿ ಕೆಲವರು, ‘‘ಈ ಹೊತ್ತು ಅಥವಾ ನಾಳೆ ನಗರಕ್ಕೆ
ಹೋಗುತ್ತೇವೆ. ಅಲ್ಲಿ ಒಂದು ವರ್ಷವಿದ್ದು ವ್ಯಾಪಾರ ಮಾಡಿ ಹಣ
ಸಂಪಾದಿಸುತ್ತೇವೆ’’ ಎಂದು ಹೇಳುವಿರಿ. ಆಲಿಸಿರಿ! ಇದರ ಬಗ್ಗೆ
ಯೋಚಿಸಿರಿ: 14ನಾಳೆ ಏನಾಗುವುದೊ ನಿಮಗೆ ತಿಳಿಯದು!
ನಿಮ್ಮ ಜೀವನವು ಹಬೆಯಂತಿದೆ. ನೀವು ಅದನ್ನು ಸ್ವಲ್ಪಕಾಲ
ನೋಡುವಿರಿ. ನಂತರ ಅದು ಅದೃಶ್ಯವಾಗುವುದು. 15ಆದು
ದರಿಂದ, ನೀವು ಹೀಗೆ ಹೇಳಬೇಕು. ‘‘ಪ್ರಭುವು ಇಚ್ಛೆಪಟ್ಟರೆ,
ನಾವು ಜೀವಿಸಿರುತ್ತೇವೆ. ಇಂಥಿಂಥದ್ದನ್ನು ಮಾಡುತ್ತೇವೆ.’’
16ಆದರೆ ನೀವೀಗ ಜಂಬಗಾರರಾಗಿ ಹೊಗಳಿಕೊಳ್ಳುತ್ತೀರಿ.
ನಿಮ್ಮ ಹೊಗಳಿಕೆಯೆಲ್ಲವೂ ಕೆಟ್ಟದ್ದು. 17ಒಳ್ಳೆಯದನ್ನು ಹೇಗೆ
ಮಾಡಬೇಕೆಂದು ತಿಳಿದಿದ್ದರೂ ಒಳ್ಳೆಯದನ್ನು ಮಾಡದಿರು
ವವನು ಪಾಪವನ್ನು ಮಾಡುವವನಾಗಿದ್ದಾನೆ.

### ಸ್ವಾರ್ಥಪರರಾದ ಶ್ರೀಮಂತರನ್ನು ದಂಡಿಸಲಾಗುವುದು

5 ಶ್ರೀಮಂತ ಜನರೇ, ಕೇಳಿರಿ! ನಿಮಗೆ ಮಹಾಕಷ್ಟವು
ಬರಲಿರುವುದರಿಂದ ಗೋಳಾಡಿರಿ, ದುಃಖಪಡಿರಿ. 2ನಿಮ್ಮ
ಶ್ರೀಮಂತಿಕೆಯು ಕೊಳೆತುಹೋಗುತ್ತದೆ ಮತ್ತು ಬೆಲೆಯಿಲ್ಲ
ದಂತಾಗುತ್ತದೆ. ನಿಮ್ಮ ಬಟ್ಟೆಗಳನ್ನು ನುಸಿಗಳು ತಿಂದುಹಾಕುತ್ತವೆ.
3ನಿಮ್ಮ ಬೆಳ್ಳಿಬಂಗಾರಗಳು ತುಕ್ಕು ಹಿಡಿಯುತ್ತವೆ. ನೀವು
ತಪ್ಪಿತಸ್ಥರೆಂಬುದಕ್ಕೆ ಆದೇ ಸಾಕ್ಷಿಯಾಗಿದೆ. ಅವುಗಳ ತುಕ್ಕು ನಿಮ್ಮ
ದೇಹವನ್ನು ಬೆಂಕಿಯಂತೆ ತಿಂದುಬಿಡುತ್ತವೆ. ನೀವು ಈ ಕೊನೆಯ
ದಿನಗಳಲ್ಲಿ ನಿಮ್ಮ ಭಂಡಾರವನ್ನು ತುಂಬಿಸಿಕೊಂಡಿದ್ದೀರಿ.
4ಜನರು ನಿಮ್ಮ ಹೊಲಗಳಲ್ಲಿ ಕೆಲಸ ಮಾಡಿದರೂ ನೀವು ಅವರಿಗೆ
ಕೂಲಿಯನ್ನು ಕೊಡಲಿಲ್ಲ. ಅವರು ನಿಮ್ಮ ವಿರುದ್ಧವಾಗಿ ಗೋಳಾ
ಡುತ್ತಿದ್ದಾರೆ. ಅವರು ನಿಮ್ಮ ಬೆಳೆಗಳ ಸುಗ್ಗಿಯನ್ನು ಮಾಡಿದರು.
ಈಗ ಪರಲೋಕ ಸೇನೆಯ ಅಧಿಪತಿಯಾದ ಪ್ರಭುವು ಅವರ
ಗೋಳಾಟವನ್ನು ಕೇಳಿಸಿಕೊಂಡಿದ್ದಾನೆ. 5ನಿಮ್ಮ ಈ ಲೋಕದ

---

**ದೇವರು … ಇರಬೇಕೆಂದಷ್ಟೇ** ವಿಮೋಚನ. 20:5.

**ದೇವರು … ದಯಪಾಲಿಸುತ್ತಾನೆ** ಜ್ಞಾನೋಕ್ತಿ. 3:34.

ಜೀವನವು ಐಶ್ವರ್ಯದಿಂದ ತುಂಬಿದೆ. ನೀವು ಇಷ್ಟಪಟ್ಟದ್ದನ್ನೆಲ್ಲ
ಪಡೆದುಕೊಂಡು ತೃಪ್ತರಾದಿರಿ. ವಧಿಸುವ ಕಾಲಕ್ಕೆ ಸಿದ್ಧವಾಗಿರುವ
ಪಶುವಿನಂತೆ ನಿಮ್ಮನ್ನು ಕೊಬ್ಬಿಸಿಕೊಂಡಿದ್ದೀರಿ. 6ನೀವು ಒಳ್ಳೆಯ
ಜನರಿಗೆ ದಂಡನೆ ವಿಧಿಸಿದಿರಿ. ಅವರು ನಿಮಗೆ ವಿರೋಧ
ವಾಗಿಲ್ಲದಿದ್ದರೂ ಅವರನ್ನು ಕೊಂದುಹಾಕಿದಿರಿ.

### ತಾಳ್ಮೆಯಿಂದಿರಿ

7ಸಹೋದರ ಸಹೋದರಿಯರೇ, ತಾಳ್ಮೆಯಿಂದಿರಿ, ಪ್ರಭು
ವಾದ ಯೇಸು ಪ್ರತ್ಯಕ್ಷನಾಗುತ್ತಾನೆ. ಆದ್ದರಿಂದ ಅಲ್ಲಿಯವರೆಗೆ
ತಾಳ್ಮೆಯಿಂದಿರಿ. ತನ್ನ ಅಮೂಲ್ಯ ಬೆಳೆಯು ಭೂಮಿಯಿಂದ
ಬರುವ ತನಕ ರೈತನು ತಾಳ್ಮೆಯಿಂದ ಕಾಯುತ್ತಾನೆ. ಮೊದಲ
ಹಾಗೂ ಕೊನೆಯ ಮಳೆಯು ತನ್ನ ಬೆಳೆಯ ಮೇಲೆ ಸುರಿಯುವ
ತನಕ ರೈತನು ತಾಳ್ಮೆಯಿಂದ ಕಾದಿರುತ್ತಾನೆ. 8ನೀವೂ ತಾಳ್ಮೆ
ಯಿಂದಿರಬೇಕು. ನಿಮ್ಮ ನಿರೀಕ್ಷೆಯನ್ನು ಬಿಡಬೇಡಿ. ಪ್ರಭು
ಯೇಸು ಬೇಗನೆ ಪ್ರತ್ಯಕ್ಷನಾಗುವನು. 9ಸಹೋದರ ಸಹೋದರಿ
ಯರೇ, ಒಬ್ಬರಮೇಲೊಬ್ಬರು ದೂರದಿರಿ. ನೀವು ದೂರುವು
ದನ್ನು ನಿಲ್ಲಿಸದಿದ್ದರೆ ದೋಷಿಗಳೆಂದು ನಿಮಗೆ ತೀರ್ಪು ನೀಡ
ಲಾಗುವುದು. ನ್ಯಾಯಾಧಿಪತಿಯು ಬರಲು ಸಿದ್ಧನಾಗಿದ್ದಾನೆ!
10ಸಹೋದರ ಸಹೋದರಿಯರೇ, ಪ್ರಭುವಿನ ಸಂದೇಶವನ್ನು
ತಿಳಿಸಿದ ಪ್ರವಾದಿಗಳು ನಿಮಗೆ ಮಾದರಿಯಾಗಿರಲಿ. ಅವರು
ಅನೇಕ ರೀತಿಯಲ್ಲಿ ಸಂಕಟವನ್ನು ಅನುಭವಿಸಿದರೂ ತಾಳ್ಮೆ
ಯಿಂದಿದ್ದರು. 11ತಾಳಿಕೊಂಡಿರುವವರನ್ನು ಧನ್ಯರೆಂದು ಹೇಳು
ತ್ತೇವಲ್ಲವೇ. ಯೋಬನ ತಾಳ್ಮೆಯ ಬಗ್ಗೆ ನಿಮಗೆ ತಿಳಿದದೆ.
ಯೋಬನು ಎಲ್ಲಾ ಬಗೆಯ ಸಂಕಟಗಳನ್ನು ಅನುಭವಿಸಿದ
ಮೇಲೆ ಪ್ರಭುವು ಅವನಿಗೆ ಸಹಾಯ ಮಾಡಿದನು. ಪ್ರಭುವು
ದಯೆಯಿಂದಲೂ ಕರುಣೆಯಿಂದಲೂ ತುಂಬಿದ್ದಾನೆಂದು ಇದು
ತೋರಿಸುತ್ತದೆ.

### ಎಚ್ಚರಿಕೆಯಿಂದ ಮಾತಾಡಿರಿ

12ನನ್ನ ಸಹೋದರ ಸಹೋದರಿಯರೇ, ನೀವು ವಾಗ್ದಾನ
ಮಾಡುವಾಗ ಆಣೆ ಇಡಬೇಡಿರಿ. ಇದು ಬಹಳ ಮುಖ್ಯವಾದದ್ದು.
ನಿಮ್ಮ ಹೇಳಿಕೆಯನ್ನು ನಿರೂಪಿಸಲು ಪರಲೋಕದ,
ಭೂಲೋಕದ ಮತ್ತು ಬೇರಾವುದರ ಹೆಸರನ್ನೂ ಬಳಸಬೇಡಿ.
ಹೌದಾಗಿದ್ದರೆ, ‘‘ಹೌದು’’ ಎನ್ನಿರಿ. ಇಲ್ಲವಾಗಿದ್ದರೆ, ‘‘ಇಲ್ಲ’’
ಎನ್ನಿರಿ. ನೀವು ಹೀಗೆ ಮಾಡಿದರೆ, ನಿಮಗೆ ದೋಷಿಗಳೆಂಬ
ತೀರ್ಪಾಗುವುದಿಲ್ಲ.

### ಪ್ರಾರ್ಥನೆಯ ಶಕ್ತಿ

13ನಿಮ್ಮಲ್ಲಿ ತೊಂದರೆಗೆ ಒಳಗಾಗಿರುವವನು ಪ್ರಾರ್ಥಿಸ
ಬೇಕು. ನಿಮ್ಮಲ್ಲಿ ಸಂತೋಷದಿಂದಿರುವವನು ಹಾಡಬೇಕು.
14ನಿಮ್ಮಲ್ಲಿ ಕಾಯಿಲೆಯಾಗಿರುವವನು ಸಭಾಹಿರಿಯರನ್ನು
ಕರೆಯಿಸಬೇಕು. ಹಿರಿಯರು ಅವನಿಗೆ ಎಣ್ಣೆಯನ್ನು ಹಚ್ಚಿ,
ಪ್ರಭುವಿನ ಹೆಸರಿನಲ್ಲಿ ಅವನಿಗೋಸ್ಕರ ಪ್ರಾರ್ಥಿಸಬೇಕು.
15ನಂಬಿಕೆಯಿಂದ ಮಾಡಿದ ಪ್ರಾರ್ಥನೆಯು ಕಾಯಿಲೆಯಲ್ಲಿ
ರುವವನನ್ನು ಗುಣಪಡಿಸುತ್ತದೆ. ಪ್ರಭುವು ಅವನನ್ನು ಗುಣ
ಪಡಿಸುತ್ತಾನೆ. ಒಂದುವೇಳೆ, ಆ ವ್ಯಕ್ತಿಯು ಪಾಪ ಮಾಡಿದ್ದರೆ,
ಪ್ರಭುವು ಅವನನ್ನು ಕ್ಷಮಿಸುತ್ತಾನೆ. 16ನೀವು ಮಾಡಿದ ತಪ್ಪು
ಗಳನ್ನು ಒಬ್ಬರಿಗೊಬ್ಬರು ಯಾವಾಗಲೂ ಹೇಳಿಕೊಳ್ಳಿರಿ. ಬಳಿಕ
ಒಬ್ಬರಿಗೊಬ್ಬರು ಪ್ರಾರ್ಥಿಸಿರಿ. ನೀವು ಹೀಗೆ ಮಾಡಿದರೆ,
ದೇವರು ನಿಮ್ಮನ್ನು ಗುಣಪಡಿಸುವನು. ನೀತಿವಂತನ ಆತ್ಮಾಸಕ್ತಿ
ಯುಳ್ಳ ಪ್ರಾರ್ಥನೆಯು ಬಲವಾಗಿದೆ. 17ಎಲೀಯನು ಸಹ
ನಮ್ಮಂತೆಯೇ ಒಬ್ಬ ಮನುಷ್ಯನಾಗಿದ್ದನು. ಮಳೆ ಬಾರದಂತೆ
ಅವನು ಪ್ರಾರ್ಥಿಸಿದಾಗ ಮೂರುವರೆ ವರ್ಷಗಳವರೆಗೆ ಆ
ನಾಡಿನಲ್ಲಿ ಮಳೆಯೇ ಬೀಳಲಿಲ್ಲ! 18ಬಳಿಕ ಎಲೀಯನು ಮಳೆ
ಬರುವಂತೆ ಪ್ರಾರ್ಥಿಸಿದಾಗ ಆಕಾಶದಿಂದ ಮಳೆ ಸುರಿದು
ಭೂಮಿಯಲ್ಲಿ ಮತ್ತೆ ಬೆಳೆಯು ಫಲಿಸಿತು.

### ಆತ್ಮವನ್ನು ರಕ್ಷಿಸಿ

19ನನ್ನ ಸಹೋದರ ಸಹೋದರಿಯರೇ, ನಿಮ್ಮಲ್ಲಿ ಒಬ್ಬನು
ಸತ್ಯದಿಂದ ದೂರವಾಗಿ ಅಲೆದಾಡುತ್ತಿದ್ದರೆ, ಮತ್ತೊಬ್ಬನು
ಅವನಿಗೆ ಸಹಾಯಮಾಡಿ ಅವನನ್ನು ಸತ್ಯಕ್ಕೆ ನಡೆಸಬೇಕು.
20ಇದನ್ನು ಜ್ಞಾಪಕದಲ್ಲಿಟ್ಟುಕೊಂಡಿರಿ: ಒಬ್ಬ ಪಾಪಿಯನ್ನು
ತಪ್ಪಾದ ಮಾರ್ಗದಿಂದ ಸರಿಯಾದ ಮಾರ್ಗಕ್ಕೆ ನಡೆಸುವವನು
ಆ ಪಾಪಿಯ ಆತ್ಮವನ್ನು ಮರಣದಿಂದ ಪಾರುಮಾಡಿದವನೂ
ಅನೇಕ ಪಾಪಗಳಿಗೆ ಕ್ಷಮಾಪಣೆಯಾಗುವಂತೆ ಮಾಡಿದವನೂ
ಆಗುತ್ತಾನೆ.

# ಪೇತ್ರನು ಬರೆದ ಮೊದಲನೆ ಪತ್ರ

1 ಯೇಸು ಕ್ರಿಸ್ತನ ಅಪೊಸ್ತಲನಾದ ಪೇತ್ರನು, ಪೊಂತ,
ಗಲಾತ್ಯ, ಕಪ್ಪದೋಕ್ಯ, ಏಷ್ಯಾ, ಬಿಥೂನಿಯ ಎಂಬ
ಪ್ರದೇಶಗಳಲ್ಲಿ ಚದರಿಹೋಗಿ ಪ್ರವಾಸಿಗಳಾದ ದೇವಜನರಿಗೆ
ಬರೆಯುವ ಪತ್ರ. 2ದೇವರು ನಿಮ್ಮನ್ನು ಪರಿಶುದ್ಧರನ್ನಾಗಿ
ಮಾಡುವುದರ ಮೂಲಕ ಆರಿಸಿಕೊಳ್ಳಲು ಬಹುಕಾಲದ
ಹಿಂದೆಯೇ ಯೋಜನೆ ಮಾಡಿದ್ದನು. ನಿಮ್ಮನ್ನು ಪರಿಶುದ್ಧ
ರನ್ನಾಗಿ ಮಾಡುವುದು ಪರಿಶುದ್ಧಾತ್ಮನ ಕಾರ್ಯ. ನೀವು ಯೇಸು
ಕ್ರಿಸ್ತನ ರಕ್ತದ ಮೂಲಕ ಪರಿಶುದ್ಧರಾಗಿ ತನಗೆ ವಿಧೇಯ
ರಾಗಬೇಕೆಂಬುದು ದೇವರ ಅಪೇಕ್ಷೆಯಾಗಿತ್ತು. ಕೃಪೆಯೂ
ಶಾಂತಿಯೂ ನಿಮಗೆ ಅಧಿಕವಾಗಿ ಲಭಿಸಲಿ.

### ಜೀವಂತವಾದ ನಿರೀಕ್ಷೆ

3ನಮ್ಮ ಪ್ರಭುವಾಗಿರುವ ಯೇಸು ಕ್ರಿಸ್ತನ ತಂದೆಯಾದ
ದೇವರಿಗೆ ಸ್ತೋತ್ರವಾಗಲಿ. ದೇವರು ಮಹಾ ಕರುಣಾಳು
ವಾಗಿದ್ದಾನೆ. ಆತನು ತನ್ನ ಕರುಣೆಯಿಂದಲೇ ನಮಗೆ ಹೊಸ
ಜೀವವನ್ನು ನೀಡಿದನು. ಸತ್ತವರೊಳಗಿಂದ ಎದ್ದುಬಂದ ಯೇಸು
ಕ್ರಿಸ್ತನ ಮೂಲಕ ಅದು ನಮಗೆ ಒಂದು ಜೀವಂತ ನಿರೀಕ್ಷೆಯನ್ನು
ತರುತ್ತದೆ. 4ದೇವರು ತನ್ನ ಮಕ್ಕಳಿಗೆ ನೀಡುವ ಆಶೀರ್ವಾದ
ಗಳಲ್ಲಿ ಈಗ ನಮಗೆ ನಿರೀಕ್ಷೆಯಿದೆ. ಅವು ನಿಮಗಾಗಿ ಪರಲೋಕ
ದಲ್ಲಿ ಇಡಲ್ಪಟ್ಟಿವೆ. ಅವು ಹಾಳಾಗುವುದಿಲ್ಲ, ನಾಶವಾಗುವುದಿಲ್ಲ
ಮತ್ತು ಸೌಂದರ್ಯವನ್ನು ಕಳೆದುಕೊಳ್ಳುವುದಿಲ್ಲ. 5ದೇವರ
ಶಕ್ತಿಯು ನಿಮ್ಮ ನಂಬಿಕೆಯ ಮೂಲಕ ನಿಮ್ಮನ್ನು ಕಾಯುತ್ತದೆ.
ನಿಮಗೆ ರಕ್ಷಣೆಯಾಗುವವರೆಗೆ ನಿಮ್ಮನ್ನು ಸುರಕ್ಷಿತವಾಗಿಡು
ತ್ತದೆ. ಸಿದ್ಧವಾಗಿರುವ ಆ ರಕ್ಷಣೆಯು ಅಂತ್ಯಕಾಲದಲ್ಲಿ ನಿಮಗೆ
ದೊರೆಯುವುದು. 6ಇದು ನಿಮ್ಮನ್ನು ಬಹಳ ಸಂತೋಷ
ಗೊಳಿಸುತ್ತದೆ. ಆದರೆ ಈಗ ಸ್ವಲ್ಪಕಾಲ ಅನೇಕ ವಿವಾದದ
ತೊಂದರೆಗಳು ನಿಮ್ಮಲ್ಲಿ ದುಃಖವನ್ನು ಉಂಟುಮಾಡಬಹುದು.
7ನಿಮ್ಮ ನಂಬಿಕೆಯು ಪರಿಶುದ್ಧವಾಗಿದೆ ಎಂಬುದನ್ನು ಪ್ರಕಟಿ
ಸಲು ಈ ತೊಂದರೆಗಳು ಸಂಭವಿಸುತ್ತವೆ. ನಿಮ್ಮ ನಂಬಿಕೆಯ
ಪರಿಶುದ್ಧತೆಯು ಬಂಗಾರದ ಮೌಲ್ಯಕ್ಕಿಂತಲೂ ಹೆಚ್ಚಿನದಾಗಿದೆ.
ಬಂಗಾರವು ನಶಿಸಿಹೋಗುವಂಥದ್ದಾಗಿದ್ದರೂ ಅದನ್ನು ಬೆಂಕಿ
ಯಲ್ಲಿ ಪುಟ ಹಾಕಿ ಅದರ ಪರಿಶುದ್ಧತೆಯನ್ನು ಶೋಧಿಸುವರು.
ಯೇಸು ಕ್ರಿಸ್ತನು ಪ್ರತ್ಯಕ್ಷನಾದಾಗ, ನಿಮ್ಮ ನಂಬಿಕೆಯ
ಪರಿಶುದ್ಧತೆಯು ನಿಮಗೆ ಕೀರ್ತಿ, ಪ್ರಭಾವ ಮತ್ತು ಗೌರವ
ಗಳನ್ನು ತರುತ್ತದೆ. 8ನೀವು ಕ್ರಿಸ್ತನನ್ನು ನೋಡದಿದ್ದರೂ ಆತನನ್ನು
ಪ್ರೀತಿಸುವಿರಿ. ಈಗ ಆತನನ್ನು ನೋಡದಿದ್ದರೂ ಆತನಲ್ಲಿ
ನಂಬಿಕೆಯಿಟ್ಟಿದ್ದೀರಿ. ನಿಮ್ಮಲ್ಲಿ ಹೇಳಲಾಗದಷ್ಟು ಆನಂದವು
ತುಂಬಿಕೊಂಡಿದೆ. ಆ ಆನಂದವು ಪ್ರಭಾವಪೂರ್ಣವಾಗಿದೆ.
9ನಿಮ್ಮ ನಂಬಿಕೆಗೆ ಒಂದು ಗುರಿಯಿದೆ. ನಿಮ್ಮ ಆತ್ಮವನ್ನು
ರಕ್ಷಿಸಬೇಕೆಂಬುದೇ ಆ ಗುರಿ. ನಿಮ್ಮ ಗುರಿಯಾಗಿರುವ ರಕ್ಷಣೆ
ಯನ್ನು ಹೊಂದಿಕೊಳ್ಳುವಿರಿ.

10ಪ್ರವಾದಿಗಳು ಈ ರಕ್ಷಣೆಯನ್ನು ಕುರಿತು ಸೂಕ್ಷ್ಮವಾಗಿ
ಹುಡುಕಿ ಪರಿಶೀಲಿಸಲು ಪ್ರಯತ್ನಿಸಿದರು. ನಿಮಗೆ ಮುಂದೆ ಬರ
ಲಿರುವ ಕೃಪೆಯನ್ನು ಕುರಿತು ಅವರು ಮಾತನಾಡಿದರು. 11ಕ್ರಿಸ್ತನ
ಆತ್ಮನು ಅವರಲ್ಲಿದ್ದನು. ಆ ಆತ್ಮನು ಕ್ರಿಸ್ತನಿಗೆ ಸಂಭವಿಸಬಹು
ದಾದ ಸಂಕಟವನ್ನು ಮತ್ತು ಆ ಸಂಕಟಗಳ ನಂತರ ಬರಲಿದ್ದ
ಮಹಿಮೆಯನ್ನು ಕುರಿತು ತಿಳಿಸುತ್ತಿದ್ದನು. ಆ ಪ್ರವಾದಿಗಳು
ತಮಗೆ ಆತ್ಮನು ತೋರಿಸುತ್ತಿದ್ದುದನ್ನು ತಿಳಿದುಕೊಳ್ಳಲು
ಪ್ರಯತ್ನಿಸಿದರು. ಆ ಸಂಗತಿಗಳು ಯಾವಾಗ ಸಂಭವಿಸುತ್ತವೆ
ಹಾಗೂ ಆ ಕಾಲದಲ್ಲಿ ಈ ಲೋಕವು ಹೇಗಿರುತ್ತದೆ ಎಂಬುದನ್ನು
ತಿಳಿದುಕೊಳ್ಳಲು ಪ್ರಯತ್ನಿಸಿದರು. 12ಆ ಪ್ರವಾದಿಗಳು ಮಾಡಿದ
ಈ ಸೇವೆಯು ನಿಮಗೋಸ್ಕರವೇ ಹೊರತು ಅವರಿಗೋಸ್ಕರ
ವಲ್ಲ ಎಂಬುದು ಅವರಿಗೆ ಪ್ರಕಟವಾಯಿತು. ಈಗ ನೀವು ಕೇಳಿದ
ಸಂಗತಿಗಳನ್ನು ಅವರು ತಿಳಿಸಿದಾಗ ನಿಮ್ಮ ಸೇವೆಯನ್ನೇ
ಮಾಡುತ್ತಿದ್ದರು. ನಿಮಗೆ ಸುವಾರ್ತೆಯನ್ನು ತಿಳಿಸಿದವರೇ
ಪರಲೋಕದಿಂದ ಕಳುಹಿಸಲ್ಪಟ್ಟ ಪವಿತ್ರಾತ್ಮನ ಸಹಾಯದಿಂದ
ನಿಮಗೆ ಆ ಸಂಗತಿಗಳನ್ನು ತಿಳಿಸಿದರು. ನಿಮಗೆ ತಿಳಿಸಿದ ಸಂಗತಿಗಳ
ಬಗ್ಗೆ ತಿಳಿದುಕೊಳ್ಳಲು ದೇವದೂತರೂ ಕಾತುರರಾಗಿದ್ದಾರೆ.

### ಪರಿಶುದ್ಧರಾಗಿ ಜೀವಿಸಲು ಆಹ್ವಾನ

13ಆದುದರಿಂದ ನೀವು ನಿಮ್ಮ ಮನಸ್ಸುಗಳನ್ನು ಸೇವೆಗಾಗಿ
ಸಿದ್ಧಪಡಿಸಿರಿ. ಅಲ್ಲದೆ ನಿಮ್ಮನ್ನು ಹತೋಟಿಯಲ್ಲಿಟ್ಟುಕೊಂಡಿರಿ.
ಯೇಸು ಕ್ರಿಸ್ತನು ಪ್ರತ್ಯಕ್ಷನಾಗುವಾಗ ನಿಮಗೆ ದೊರೆಯುವ
ಕೃಪಾವರದ ಮೇಲೆಯೇ ನಿಮ್ಮ ನಿರೀಕ್ಷೆಯೆಲ್ಲಾ ಇರಬೇಕು.
14ನೀವು ಮೊದಲು ಈ ಸಂಗತಿಗಳ ಕುರಿತು ಅರ್ಥಮಾಡಿ
ಕೊಳ್ಳದಿದ್ದ ಕಾರಣ, ನೀವು ನಿಮ್ಮ ಇಚ್ಛೆಯಂತೆ ಕೆಟ್ಟಕಾರ್ಯ
ಗಳನ್ನು ಮಾಡಿದಿರಿ. ಆದರೆ ಈಗ ನೀವು ವಿಧೇಯರಾಗಿರುವ
ದೇವಮಕ್ಕಳು, ಆದ್ದರಿಂದ ಈಗ ಮೊದಲಿನಂತೆ ಜೀವಿಸಬೇಡಿ.
15ದೇವರು ಪರಿಶುದ್ಧನಾಗಿರುವಂತೆ ನಿಮ್ಮ ನಡೆನುಡಿಗಳು ಪರಿ
ಶುದ್ಧವಾಗಿರಲಿ. ನಿಮ್ಮನ್ನು ಕರೆದಾತನು ದೇವರೇ. 16“ನಾನು
ಪರಿಶುದ್ಧನಾಗಿರುವುದರಿಂದ ನೀವೂ ಪರಿಶುದ್ಧರಾಗಿರ
ಬೇಕು” * ಎಂಬುದಾಗಿ ಪವಿತ್ರ ಗ್ರಂಥವು ಹೇಳುತ್ತದೆ.

17ನೀವು ದೇವರಲ್ಲಿ ಪ್ರಾರ್ಥಿಸುವಾಗ ಆತನನ್ನು ತಂದೆ
ಯೆಂದು ಕರೆಯುತ್ತೀರಿ. ದೇವರು ಪ್ರತಿಯೊಬ್ಬರ ಕೆಲಸಕ್ಕೂ
ಪಕ್ಷಪಾತವಿಲ್ಲದೆ ತೀರ್ಪು ಮಾಡುವನು. ನೀವು ಈ ಲೋಕದಲ್ಲಿ

---

**ನಾನು … ಪರಿಶುದ್ಧರಾಗಿರಬೇಕು** ಯಾಜಕ. 11:44,45; 19:2; 20:7.

ಪ್ರವಾಸಿಗಳಾಗಿರುವುದರಿಂದ ದೇವರಿಗೆ ಭಯಪಟ್ಟು ಜೀವಿಸಿ.
18ಮೊದಲು ನೀವು ನಿರರ್ಥಕವಾದ ರೀತಿಯಲ್ಲಿ ಜೀವಿಸು
ತ್ತಿದ್ದಿರೆಂಬುದು ನಿಮಗೇ ತಿಳಿದಿದೆ. ನಿಮಗಿಂತಲೂ ಮೊದಲು
ಜೀವಿಸಿದ್ದವರಿಂದ ಅಂತಹ ಜೀವಿತವನ್ನು ಕಲಿತುಕೊಂಡಿರಿ.
ಆದರೆ ಅದರಿಂದ ನಿಮಗೆ ಬಿಡುಗಡೆಯಾದದ್ದು ನಶಿಸಿ
ಹೋಗುವ ಬೆಳ್ಳಿ ಬಂಗಾರಗಳಿಂದಲ್ಲ. 19ಪೂರ್ಣಾಂಗವಾದ
ಮತ್ತು ಪರಿಶುದ್ಧವಾದ ಕುರಿಮರಿಯಾದ ಕ್ರಿಸ್ತನ ಅಮೂಲ್ಯ
ವಾದ ರಕ್ತದಿಂದ ನಿಮಗೆ ಬಿಡುಗಡೆ ಆಯಿತು. 20ಈ ಲೋಕವು
ಸೃಷ್ಟಿಯಾಗುವುದಕ್ಕೆ ಮೊದಲೇ ಕ್ರಿಸ್ತನು ಆರಿಸಲ್ಪಟ್ಟನು. ಆದರೆ
ಆತನು ನಿಮಗೋಸ್ಕರ ಈ ಅಂತ್ಯಕಾಲದಲ್ಲಿ ಪ್ರತ್ಯಕ್ಷನಾದನು.
21ನೀವು ಕ್ರಿಸ್ತನ ಮೂಲಕ ದೇವರನ್ನು ನಂಬಿದ್ದೀರಿ. ದೇವರು
ಕ್ರಿಸ್ತನನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸಿದನು.
ನಂತರ ದೇವರು ಆತನಿಗೆ ಪ್ರಭಾವವನ್ನು ದಯಪಾಲಿಸಿದನು.
ಆದುದರಿಂದ ನಿಮ್ಮ ನಂಬಿಕೆ ಮತ್ತು ನಿರೀಕ್ಷೆಗಳು ದೇವರ
ಲ್ಲಿರಲಿ.

22ನೀವು ಸತ್ಯಕ್ಕೆ ವಿಧೇಯರಾಗಿರುವುದರ ಮೂಲಕ ನಿಮ್ಮನ್ನು
ಪರಿಶುದ್ಧರನ್ನಾಗಿ ಮಾಡಿಕೊಂಡಿದ್ದೀರಿ. ಈಗ ನಿಮ್ಮ ಸಹೋದರ
ಸಹೋದರಿಯರನ್ನು ನಿಜವಾಗಿಯೂ ಪ್ರೀತಿಸಬಲ್ಲವರಾಗಿ
ದ್ದೀರಿ. ಆದ್ದರಿಂದ ಒಬ್ಬರನ್ನೊಬ್ಬರು ಹೃದಯಪೂರ್ವಕವಾಗಿ*
ಪ್ರೀತಿಸಿರಿ. 23ನೀವು ಹೊಸದಾಗಿ ಹುಟ್ಟಿದವರಾಗಿದ್ದೀರಿ. ಈ
ಹೊಸ ಜೀವವು ನಾಶವಾಗುವಂಥದ್ದರಿಂದ ಬರಲಿಲ್ಲ. ಈ ಹೊಸ
ಜೀವವು ನಾಶವಾಗದೆ ಇರುವಂಥದ್ದರಿಂದ ಬಂದದ್ದಾಗಿದೆ.
ಸಜೀವವೂ ಶಾಶ್ವತವೂ ಆಗಿರುವ ದೇವರ ವಾಕ್ಯದ ಮೂಲಕ
ನೀವು ಹೊಸದಾಗಿ ಹುಟ್ಟಿದ್ದೀರಿ. 24ಪವಿತ್ರ ಗ್ರಂಥವು ಹೇಳುವು
ದೇನಂದರೆ,

> ‘‘ಜನರೆಲ್ಲರೂ ಹುಲ್ಲಿನಂತಿದ್ದಾರೆ. ಅವರ ವೈಭವ
> ವೆಲ್ಲವೂ ಹುಲ್ಲಿನ ಹೂವಿನಂತಿದೆ. ಹುಲ್ಲು
> ಒಣಗಿ ಹೋಗುವುದು, ಹೂವು ಉದರಿ
> ಹೋಗುವುದು,
> 25 ಆದರೆ ದೇವರ ವಾಕ್ಯವು ಎಂದೆಂದಿಗೂ ಜೀವಂತ
> ವಾಗಿರುತ್ತದೆ.’’
>
> *ಯೆಶಾಯ 40:6-8*

ನಿಮಗೆ ಈ ವಾಕ್ಯವನ್ನೇ ತಿಳಿಸಲಾಯಿತು.

### ಜೀವಂತವಾದ ಕಲ್ಲು ಮತ್ತು ಪವಿತ್ರವಾದ ದೇಶ

2 ಆದುದರಿಂದ ಇತರ ಜನರಿಗೆ ಕೇಡು ಮಾಡಬೇಡಿ,
ಸುಳ್ಳಾಡದಿರಿ, ಜನರನ್ನು ಮೋಸಗೊಳಿಸಬೇಡಿ, ಹೊಟ್ಟೆ
ಕಿಚ್ಚು ಪಡದಿರಿ, ಜನರ ಬಗ್ಗೆ ಕೆಟ್ಟ ಮಾತುಗಳನ್ನು ಆಡದಿರಿ.
ಇವುಗಳನ್ನೆಲ್ಲಾ ನಿಮ್ಮ ಜೀವಿತದಿಂದ ಹೊರಕ್ಕೆ ಹಾಕಿರಿ.
2ಹೊಸದಾಗಿ ಹುಟ್ಟಿದ ಕೂಸುಗಳಂತಿರಿ. ನಿಮ್ಮ ಆತ್ಮವನ್ನು
ಪೋಷಿಸುವಂಥ ಶುದ್ಧ ಹಾಲನ್ನು (ದೇವರ ವಾಕ್ಯವೆಂಬ)
ಬಯಸಿರಿ. ನೀವು ಅದನ್ನು ಕುಡಿಯುವುದರಿಂದ ಬೆಳವಣಿಗೆ
ಹೊಂದಿ ರಕ್ಷಿಸಲ್ಪಡುವಿರಿ. 3ನೀವು ಈಗಾಗಲೇ ದೇವರ
ಒಳ್ಳೆಯತನವನ್ನು ರುಚಿ ನೋಡಿದ್ದೀರಿ.

4ಪ್ರಭುವಾದ ಯೇಸುವೇ ಜೀವವುಳ್ಳ ‘‘ಕಲ್ಲು.’’ ಈ ಲೋಕದ
ಜನರು ತಮಗೆ ಆ ‘‘ಕಲ್ಲು’’ (ಯೇಸು) ಬೇಡವೆಂದು ತೀರ್ಮಾ
ನಿಸಿದರು. ಆದರೆ ಆತನು ದೇವರಿಂದ ಆರಿಸಲ್ಪಟ್ಟ ‘‘ಕಲ್ಲು.’’
ಆತನು ದೇವರಿಗೆ ಅಮೂಲ್ಯನಾಗಿದ್ದಾನೆ. ಆದುದರಿಂದ ಆತನ
ಹತ್ತಿರಕ್ಕೆ ಬನ್ನಿರಿ. 5ನೀವೂ ಸಹ ಜೀವವುಳ್ಳ ಕಲ್ಲುಗಳಾಗಿದ್ದೀರಿ.
ಆತ್ಮಸಂಬಂಧವಾದ ದೇವಾಲಯವಾಗುವದಕ್ಕಾಗಿ ನೀವೇ ಕಟ್ಟ
ಲ್ಪಡುತ್ತಿದ್ದೀರಿ; ದೇವರಿಂದ ಸ್ವೀಕೃತವಾಗುವಂಥ ಆತ್ಮಿಕ ಯಜ್ಞ
ಗಳನ್ನು ಯೇಸು ಕ್ರಿಸ್ತನ ಮೂಲಕ ದೇವರಿಗೆ ಅರ್ಪಿಸುವ ಪವಿತ್ರ
ಯಾಜಕರಾಗಿದ್ದೀರಿ. 6ಪವಿತ್ರ ಗ್ರಂಥವು ಹೇಳುವುದೇನಂದರೆ,

> ‘‘ನಾನು ಅಮೂಲ್ಯವಾದ ಮೂಲೆಗಲ್ಲನ್ನು ಆರಿಸಿ
> ದ್ದೇನೆ, ನಾನು ಆ ಕಲ್ಲನ್ನು ಚೀಯೋನಿನಲ್ಲಿ ಇಟ್ಟಿರು
> ವೆನು; ಆತನನ್ನು ನಂಬುವವನು ಎಂದಿಗೂ ಆಶಾ
> ಭಂಗಪಡುವುದಿಲ್ಲ’’
>
> *ಯೆಶಾಯ 28:16*

7ನಂಬಿಕೆಯುಳ್ಳ ಜನರಾದ ನಿಮಗೆ ಆ ಕಲ್ಲು (ಯೇಸು) ಹೆಚ್ಚು
ಬೆಲೆಯುಳ್ಳದ್ದು. ಆದರೆ ನಂಬದ ಜನರಿಗೆ ಆತನು
ಇಂತೆಂದಿದ್ದಾನೆ.

> ‘‘ಕಟ್ಟುವವರು ಬೇಡವೆಂದು ಬಿಟ್ಟ ಕಲ್ಲೇ ಮೂಲೆ
> ಗಲ್ಲಾಯಿತು.’’
>
> *ಕೀರ್ತನೆ 118:22*

8ನಂಬದಿರುವ ಜನರಿಗೆ ಆತನು:

> ‘‘ಜನರನ್ನು ಮುಗ್ಗರಿಸುವ ಕಲ್ಲೂ ಜನರನ್ನು
> ಬೀಳಿಸುವ ಕಲ್ಲೂ ಆಗಿದ್ದಾನೆ.’’
>
> *ಯೆಶಾಯ 8:14*

ದೇವರ ಮಾತಿಗೆ ಅವಿಧೇಯರಾಗುವುದರಿಂದಲೇ ಜನರು
ಮುಗ್ಗರಿಸಿ ಬೀಳುವರು. ಆ ಜನರಿಗೆ ಹೀಗೆ ಸಂಭವಿಸಲೆಂದು
ದೇವರು ಯೋಚಿಸಿದನು.

9ನೀವಾದರೊ ದೇವರಾದುಕೊಂಡ ಜನಾಂಗವೂ ರಾಜ
ವಂಶಸ್ಥರಾದ ಯಾಜಕರೂ ಮೀಸಲಾದ ಜನರೂ ದೇವರ
ಸ್ವಕೀಯ ಪ್ರಜೆಯೂ ಆಗಿದ್ದೀರಿ. ದೇವರು ತಾನು ಮಾಡಿದ
ಅತ್ಯಾಶ್ಚರ್ಯ ಸಂಗತಿಗಳನ್ನು ತಿಳಿಸಲು ನಿಮ್ಮನ್ನು ಅಂಧಕಾರ
ದಿಂದ (ಪಾಪಗಳಿಂದ) ತನ್ನ ಅದ್ಭುತವಾದ ಬೆಳಕಿಗೆ ಕರೆತಂದನು.
10ಒಂದು ಕಾಲದಲ್ಲಿ, ನೀವು ದೇವರ ಜನರಾಗಿರಲಿಲ್ಲ. ಆದರೆ
ಈಗ ನೀವು ದೇವರ ಜನರಾಗಿದ್ದೀರಿ. ಮೊದಲು ನೀವು ಕರುಣೆ
ಯನ್ನು ಹೊಂದಿರಲಿಲ್ಲ. ಆದರೀಗ ನೀವು ದೇವರ ಕರುಣೆ
ಯನ್ನು ಹೊಂದಿಕೊಂಡಿದ್ದೀರಿ.

### ದೇವರಿಗಾಗಿ ಜೀವಿಸಿ

11ಪ್ರಿಯ ಸ್ನೇಹಿತರೇ, ನೀವು ಈ ಲೋಕದಲ್ಲಿ ಪ್ರವಾಸಿಗಳಂತೆ
ಮತ್ತು ಪರದೇಶದವರಂತೆ ಇದ್ದೀರಿ. ಆದುದರಿಂದ ನಿಮ್ಮ

---

**ಹೃದಯಪೂರ್ವಕವಾಗಿ** ಕೆಲವು ಪ್ರಾಚೀನ ಪತ್ರಿಕೆಗಳಲ್ಲಿ ಪವಿತ್ರ ಹೃದಯ ಎಂದು ಹೇಳಿದೆ.

ದೇಹಗಳಿಗೆ ಇಷ್ಟವಾದ ಕೆಟ್ಟಸಂಗತಿಗಳಿಂದ ದೂರವಾಗಿರಿ. ಇವು
ನಿಮ್ಮ ಜೀವಾತ್ಮಕ್ಕೆ ವಿರುದ್ಧವಾಗಿ ಹೋರಾಡುತ್ತವೆ. 12ನಂಬಿಕೆ
ಯಿಲ್ಲದ ಜನರು ನಿಮ್ಮ ಸುತ್ತಮುತ್ತಲೆಲ್ಲಾ ವಾಸಿಸುತ್ತಿದ್ದಾರೆ.
ನೀವು ತಪ್ಪುಮಾಡುತ್ತಿರುವಿರೆಂದು ಅವರು ಹೇಳುವ ಸಾಧ್ಯತೆ
ಯಿದೆ. ಆದ್ದರಿಂದ ಒಳ್ಳೆಯವರಾಗಿ ಬಾಳಿರಿ. ನೀವು ಮಾಡುವ
ಒಳ್ಳೆಯ ಕಾರ್ಯಗಳನ್ನು ಅವರು ನೋಡುವರು ಮತ್ತು
ದೇವರು ಪ್ರತ್ಯಕ್ಷನಾದ ದಿನದಂದು ಆತನನ್ನು ಕೊಂಡಾಡುವರು.

### ಈ ಲೋಕದ ಪ್ರತಿಯೊಬ್ಬ ಅಧಿಕಾರಿಗೂ ವಿಧೇಯರಾಗಿರಿ

13ಈ ಲೋಕದ ಅಧಿಕಾರಿಗಳಿಗೆ ವಿಧೇಯರಾಗಿರಿ. ಪ್ರಭುವಿ
ಗಾಗಿ ಇದನ್ನು ಮಾಡಿರಿ. ಸರ್ವಾಧಿಕಾರಿಯಾದ ರಾಜನಿಗೆ
ವಿಧೇಯರಾಗಿರಿ. 14ರಾಜನು ಕಳುಹಿಸುವ ಅಧಿಕಾರಿಗಳಿಗೆ
ವಿಧೇಯರಾಗಿರಿ. ತಪ್ಪು ಮಾಡಿದವರನ್ನು ದಂಡಿಸಲೂ ಒಳ್ಳೆಯ
ದನ್ನು ಮಾಡಿದವರನ್ನು ಹೊಗಳಲೂ ಅವರನ್ನು ಕಳುಹಿಸ
ಲಾಗಿದೆ. 15ನೀವು ಒಳ್ಳೆಯದನ್ನು ಮಾಡುವಾಗ ನಿಮ್ಮನ್ನು
ಕುರಿತು ಕೆಟ್ಟ ಮಾತುಗಳನ್ನು ಆಡಲು ಮೂಢರಿಗೆ ಸಾಧ್ಯವಾಗು
ವುದಿಲ್ಲ. ದೇವರ ಅಪೇಕ್ಷೆಯೂ ಇದೇ ಆಗಿದೆ. 16ಸ್ವತಂತ್ರ
ಹೊಂದಿದವರಂತೆ ಜೀವಿಸಿರಿ. ಆದರೆ ನೀವು ಮಾಡುವ
ಕೆಟ್ಟಕಾರ್ಯಗಳನ್ನು ಮರೆ ಮಾಡಲು ಆ ಸ್ವಾತಂತ್ರ್ಯವನ್ನು
ಉಪಯೋಗಿಸಬೇಡಿ. ನೀವು ದೇವರ ಸೇವೆಯನ್ನು ಮಾಡುತ್ತಾ
ಜೀವಿಸಿರಿ. 17ಜನರೆಲ್ಲರಿಗೂ ಗೌರವವನ್ನು ತೋರಿಸಿರಿ. ದೇವರ
ಕುಟುಂಬದ ಸಹೋದರ ಸಹೋದರಿಯರೆಲ್ಲರನ್ನು ಪ್ರೀತಿಸಿರಿ.
ದೇವರಿಗೆ ಭಯಪಡಿರಿ ಮತ್ತು ರಾಜನನ್ನು ಗೌರವಿಸಿರಿ.

### ಕ್ರಿಸ್ತನ ಸಂಕಟದ ಉದಾಹರಣೆ

18ಸೇವಕರೇ, ನಿಮ್ಮ ಒಡೆಯರ ಅಧಿಕಾರವನ್ನು ಒಪ್ಪಿಕೊಳ್ಳಿರಿ.
ಇದನ್ನು ತುಂಬಾ ಗೌರವದಿಂದ ಮಾಡಿರಿ. ಒಳ್ಳೆಯವರಾದ
ಮತ್ತು ದಯಾಪರರಾದ ಒಡೆಯರಿಗೆ ನೀವು ವಿಧೇಯರಾಗಿರ
ಬೇಕು ಮತ್ತು ಕೆಟ್ಟವರಾದ ಒಡೆಯರಿಗೂ ವಿಧೇಯರಾಗಿರ
ಬೇಕು. 19ಒಬ್ಬನು ಅನ್ಯಾಯವಾಗಿ ಸಂಕಟಕ್ಕೆ ಒಳಗಾದಾಗ
ದೇವರಿಗಾಗಿ ಅದನ್ನು ಸಹಿಸಿಕೊಂಡರೆ ದೇವರ ಮೆಚ್ಚುಗೆಗೆ ಪಾತ್ರ
ನಾಗುತ್ತಾನೆ. 20ಆದರೆ ನಿಮ್ಮ ತಪ್ಪಿಗಾಗಿ ನೀವು ದಂಡಿಸಲ್ಪಟ್ಟರೆ
ಆ ದಂಡನೆಯನ್ನು ನೀವು ಅನುಭವಿಸಿದ್ದಕ್ಕೆ ನಿಮಗೇನೂ ಕೀರ್ತಿ
ಬರುವುದಿಲ್ಲ. ಆದರೆ ನೀವು ಒಳ್ಳೆಯದನ್ನು ಮಾಡಿದ್ದರಿಂದ
ಸಂಕಟಕ್ಕೆ ಒಳಗಾಗಿ ಅದನ್ನು ತಾಳ್ಮೆಯಿಂದ ಸಹಿಸಿಕೊಂಡರೆ ಅದು
ದೇವರನ್ನು ಸಂತೋಷಪಡಿಸುತ್ತದೆ. 21ಇದಕ್ಕಾಗಿಯೇ ನಿಮ್ಮನ್ನು
ಕರೆಯಲಾಯಿತು. ನೀವು ಅನುಸರಿಸತಕ್ಕ ಮಾದರಿಯು ಕ್ರಿಸ್ತನೇ
ಆಗಿದ್ದಾನೆ. ಆತನು ಮಾಡಿದಂತೆ ನೀವೂ ಮಾಡಿರಿ. ನೀವು
ಸಂಕಟವನ್ನು ಅನುಭವಿಸುವಾಗ ತಾಳ್ಮೆಯಿಂದಿರಬೇಕು,
ಏಕೆಂದರೆ ಕ್ರಿಸ್ತನು ನಿಮಗಾಗಿ ಸಂಕಟಪಟ್ಟನು.

> 22“ಆತನು (ಕ್ರಿಸ್ತನು) ಪಾಪವನ್ನು ಮಾಡಲಿಲ್ಲ.
> ಆತನ ಬಾಯಿಂದ ಯಾವ ಸುಳ್ಳು ಮಾತೂ
> ಬರಲಿಲ್ಲ.”
>
> *ಯೆಶಾಯ 53:9*

23ಜನರು ಕ್ರಿಸ್ತನನ್ನು ಬಯ್ದರೂ ಆತನು ಅವರನ್ನು
ಬಯ್ಯಲಿಲ್ಲ. ಆತನು ಸಂಕಟವನ್ನು ಅನುಭವಿಸಿದರೂ ಜನರನ್ನು
ಹೆದರಿಸಲಿಲ್ಲ. ಆತನು ತನ್ನ ಕಾರ್ಯವನ್ನು ದೇವರಿಗೆ
ವಹಿಸಿದನು. ಸರಿಯಾದ ನ್ಯಾಯತೀರ್ಪು ನೀಡುವಾತನು ದೇವ
ರೊಬ್ಬನೇ. 24ಕ್ರಿಸ್ತನು ನಮ್ಮ ಪಾಪಗಳನ್ನೆಲ್ಲಾ ತನ್ನ ದೇಹದಲ್ಲಿ
ಹೊತ್ತುಕೊಂಡು ಶಿಲುಬೆಯನ್ನೇರಿದನು. ನಾವು ಪಾಪ
ಕ್ಕೋಸ್ಕರ ಜೀವಿಸದೆ, ನೀತಿವಂತರಾಗಿ ಜೀವಿಸಬೇಕೆಂಬುದೇ
ಆತನ ಉದ್ದೇಶವಾಗಿತ್ತು. ಆತನ (ಕ್ರಿಸ್ತನ) ಬಾಸುಂಡೆಗಳಿಂದ
ನಿಮಗೆ ಗುಣವಾಯಿತು. 25ನೀವು ದಾರಿ ತಪ್ಪಿದ ಕುರಿ
ಗಳಾಗಿದ್ದಿರಿ. ಆದರೆ ಈಗ ನೀವು ನಿಮ್ಮ ಕುರುಬನ ಬಳಿಗೆ ಅಂದರೆ
ನಿಮ್ಮ ಆತ್ಮಗಳನ್ನು ಕಾಪಾಡುವಾತನ ಬಳಿಗೆ ಹಿಂತಿರುಗಿ
ಬಂದಿರುವಿರಿ.

### ಗಂಡ ಮತ್ತು ಹೆಂಡತಿ

3 ಸ್ತ್ರೀಯರೇ, ಇದೇ ರೀತಿಯಲ್ಲಿ ನಿಮ್ಮ ಗಂಡಂದಿರಿಗೆ
ಅಧೀನರಾಗಿರಿ. ಅವರಲ್ಲಿ ಕೆಲವರು ದೇವರ ವಾಕ್ಯಕ್ಕೆ
ಅವಿಧೇಯರಾಗಿದ್ದರೂ 2ನೀವು ದೇವರಲ್ಲಿ ಭಯಭಕ್ತಿಯುಳ್ಳವ
ರಾಗಿದ್ದು ನಿಷ್ಕಳಂಕರಾಗಿ ಜೀವಿಸುವುದನ್ನು ಕಂಡು ವಾಕ್ಯೋಪ
ದೇಶವಿಲ್ಲದಿದ್ದರೂ ದೇವರ ವಾಕ್ಯದ ಮೇಲೆ ನಂಬಿಕೆಯಿಡಲು
ನಿಮ್ಮ ನಡತೆಯಿಂದಲೇ ಪ್ರೋತ್ಸಾಹಿಸಲ್ಪಡುವರು. 3ತಲೆ
ಕೂದಲನ್ನು ಸುಂದರವಾಗಿ ಬಾಚಿಕೊಳ್ಳುವುದಾಗಲಿ ಬಂಗಾರದ
ಒಡವೆಗಳಾಗಲಿ ಒಳ್ಳೆಯ ಬಟ್ಟೆಗಳಾಗಲಿ ನಿಮ್ಮ ಸೌಂದರ್ಯದ
ಸಾಧನಗಳಾಗದಿರಲಿ. 4ಸಾತ್ವಿಕವೂ ಶಾಂತವೂ ಆದ ಆಂತ
ರ್ಯವೇ ನಿಮ್ಮ ಸೌಂದರ್ಯವಾಗಿರಬೇಕು. ಆ ಸೌಂದರ್ಯ
ನಶಿಸಿಹೋಗುವುದಿಲ್ಲ. ಅದು ದೇವರಿಗೆ ಬಹು ಅಮೂಲ್ಯ
ವಾದದ್ದು. 5ಬಹು ಕಾಲದ ಹಿಂದೆ ಜೀವಿಸಿದ್ದು ದೇವರನ್ನು
ಅನುಸರಿಸುತ್ತಾ ಪರಿಶುದ್ಧರಾಗಿದ್ದ ಸ್ತ್ರೀಯರು ಇದೇ ರೀತಿಯಲ್ಲಿ
ತಮ್ಮನ್ನು ಶೃಂಗರಿಸಿಕೊಂಡರು. ಅವರು ತಮ್ಮ ಗಂಡಂದಿರಿಗೆ
ಅಧೀನರಾಗಿದ್ದರು.

6ನಾನು ಸಾರಳಂತಹ ಸ್ತ್ರೀಯರ ಬಗ್ಗೆ ಹೇಳುತ್ತಿದ್ದೇನೆ. ಅವಳು
ತನ್ನ ಗಂಡನಾದ ಅಬ್ರಹಾಮನಿಗೆ ವಿಧೇಯಳಾಗಿದ್ದು, ಅವನನ್ನು
ತನ್ನ ಒಡೆಯನೆಂದು ಕರೆದಳು. ಸ್ತ್ರೀಯರಾದ ನೀವು ಭಯ
ಪಡದೆ ಯಾವಾಗಲೂ ಯೋಗ್ಯವಾದುದನ್ನು ಮಾಡಿದರೆ, ನೀವು
ಸಾರಳ ನಿಜವಾದ ಮಕ್ಕಳಾಗುವಿರಿ.

7ಪುರುಷರೇ, ಇದೇ ರೀತಿಯಲ್ಲಿ ನೀವು ನಿಮ್ಮ ಪತ್ನಿಯರನ್ನು
ಅರ್ಥಮಾಡಿಕೊಂಡು ಅವರೊಂದಿಗೆ ಬಾಳಬೇಕು. ನೀವು ನಿಮ್ಮ
ಪತ್ನಿಯರಿಗೆ ಗೌರವ ತೋರಬೇಕು. ಅವರು ನಿಮಗಿಂತ
ದುರ್ಬಲರು. ಆದರೆ ದೇವರು ನಿಮಗೆ ಕೊಡುವ ಆಶೀರ್ವಾದ
ವನ್ನೇ ಅಂದರೆ ನಿಜಜೀವವನ್ನು ನೀಡುವ ಕೃಪೆಯನ್ನೇ ನಿಮ್ಮ
ಪತ್ನಿಯರಿಗೂ ಕೊಡುವನು. ನೀವು ಹೀಗೆ ಜೀವಿಸುವುದಾಗಿದ್ದರೆ
ಪ್ರಾರ್ಥಿಸಲು ನಿಮಗೆ ಅಡ್ಡಿಯಾಗುವುದಿಲ್ಲ.

### ಒಳ್ಳೆಯದರ ನಿಮಿತ್ತ ಉಂಟಾಗುವ ಸಂಕಟ

8ಆದ್ದರಿಂದ ನೀವೆಲ್ಲರೂ ಒಟ್ಟಾಗಿ ಶಾಂತಿಯಿಂದ ಬಾಳಿರಿ;
ಒಬ್ಬರನ್ನೊಬ್ಬರು ಅರ್ಥಮಾಡಿಕೊಳ್ಳಲು ಪ್ರಯತ್ನಿಸಿರಿ. ಒಬ್ಬರ
ನ್ನೊಬ್ಬರು ಸಹೋದರರಂತೆ ಪ್ರೀತಿಸಿರಿ. ದಯೆತೋರುವವರೂ
ಮತ್ತು ದೀನತೆ ಉಳ್ಳವರೂ ಆಗಿರಿ. 9ಅಪಕಾರ ಮಾಡಿದವನಿಗೆ
ಅಪಕಾರ ಮಾಡದೆ, ನಿಂದಿಸಿದವನನ್ನು ನಿಂದಿಸದೆ, ಅವನನ್ನು
ಆಶೀರ್ವದಿಸುವಂತೆ ದೇವರಲ್ಲಿ ಬೇಡಿಕೊಳ್ಳಿರಿ. ಏಕೆಂದರೆ

ಆಶೀರ್ವಾದವನ್ನು ಹೊಂದಿಕೊಳ್ಳಲು ನೀವು ಕರೆಯಲ್ಪಟ್ಟವ
ರಾಗಿದ್ದೀರಿ. 10ಪವಿತ್ರ ಗ್ರಂಥವು ಹೇಳುವುದೇನಂದರೆ,

> ‘‘ಈ ಜೀವಿತದಲ್ಲಿ ಸಂತೋಷಿಸುತ್ತಾ ಸುದಿನ
> ಗಳನ್ನು ನೋಡಲು ಅಪೇಕ್ಷಿಸುವವನು ಕೆಟ್ಟ
> ಮಾತುಗಳನ್ನಾಡದಿರಲಿ; ಸುಳ್ಳನ್ನು ನುಡಿಯ
> ದಿರಲಿ.
> 11 ಅವನು ಕೆಟ್ಟದ್ದನ್ನು ಮಾಡದೆ ಒಳ್ಳೆಯದನ್ನೇ
> ಮಾಡಲಿ. ಅವನು ಶಾಂತಿಯನ್ನು ಎದುರು
> ನೋಡುತ್ತಾ ಅದನ್ನು ಪಡೆಯಲು ಪ್ರಯತ್ನಿಸಲಿ.
> 12 ನೀತಿವಂತರನ್ನು ಪ್ರಭುವು ಕಾಯುತ್ತಾನೆ; ಅವರ
> ಪ್ರಾರ್ಥನೆಗಳನ್ನು ಆಲಿಸುತ್ತಾನೆ. ಆದರೆ ಕೆಟ್ಟ
> ದ್ದನ್ನು ಮಾಡುವ ಜನರನ್ನು ಪ್ರಭುವು ವಿರೋಧಿ
> ಸುತ್ತಾನೆ.’’
>
> *ಕೀರ್ತನೆ 34:12-16*

13ನೀವು ಯಾವಾಗಲೂ ಒಳ್ಳೆಯದನ್ನು ಮಾಡಲು
ಪ್ರಯತ್ನಿಸುತ್ತಿದ್ದರೆ, ಯಾರೂ ನಿಮಗೆ ಕೇಡು ಮಾಡುವುದಿಲ್ಲ.
14ಆದರೆ ಯೋಗ್ಯವಾದುದನ್ನು ಮಾಡುವಾಗ ನೀವು ಸಂಕಟ
ಪಡಬೇಕಾಗಬಹುದು. ಆದರೆ ‘‘ನಿಮ್ಮನ್ನು ಸಂಕಟಕ್ಕೆ ಒಳ
ಪಡಿಸುವ ಜನರಿಗೆ ಹೆದರಬೇಡಿರಿ ಮತ್ತು ಚಿಂತಿಸಬೇಡಿರಿ.’’*
15ನಿಮ್ಮ ಹೃದಯಗಳಲ್ಲಿ ಕ್ರಿಸ್ತನೇ ಪ್ರಭುವಾಗಿರಲಿ. ನಿಮ್ಮ
ಲ್ಲಿರುವ ನಿರೀಕ್ಷೆಗೆ ಆಧಾರವೇನೆಂದು ನಿಮ್ಮನ್ನು ಕೇಳುವ ಪ್ರತಿ
ಯೊಬ್ಬರಿಗೂ ಉತ್ತರಹೇಳಲು ಯಾವಾಗಲೂ ಸಿದ್ಧವಾಗಿರಿ.
16ಆದರೆ ಸಾತ್ವಿಕತೆಯಿಂದ ಗೌರವಕರವಾದ ರೀತಿಯಲ್ಲಿ
ಅವರಿಗೆ ಉತ್ತರವನ್ನು ಹೇಳಿ. ನೀವು ಮಾಡುತ್ತಿರುವುದು
ಯೋಗ್ಯವಾದದ್ದೆಂಬುದು ನಿಮಗೆ ಯಾವಾಗಲೂ ಖಚಿತವಾಗಿ
ತಿಳಿದಿರಬೇಕು. ಆಗ, ನಿಮ್ಮ ಬಗ್ಗೆ ಕೆಟ್ಟಮಾತುಗಳನ್ನು ಹೇಳು
ವವರು ನಾಚಿಕೆಪಡುವರು. ನೀವು ಕ್ರಿಸ್ತನಲ್ಲಿ ಒಳ್ಳೆಯವರಾಗಿ
ಜೀವಿಸುವುದರ ಕುರಿತು ಅವರು ಕೆಟ್ಟ ಸಂಗತಿಗಳನ್ನು ಹೇಳು
ತ್ತಾರೆ. ಅವರು ನಿಮ್ಮ ಬಗ್ಗೆ ಹೇಳಿದ ಕೆಟ್ಟ ಸಂಗತಿಗಳಿಗಾಗಿ ನಾಚಿಕೆ
ಪಡುವರು. 17ಕೆಟ್ಟದ್ದನ್ನು ಮಾಡಿ ಸಂಕಟಪಡುವುದಕ್ಕಿಂತ
ಒಳ್ಳೆಯದನ್ನು ಮಾಡಿ ಸಂಕಟಪಡುವುದು ಉತ್ತಮ. ಹೌದು,
ಅದು ದೇವರ ಅಪೇಕ್ಷೆಯಾಗಿದ್ದರೆ ಅದೇ ಒಳ್ಳೆಯದು. 18ನಿಮ್ಮ
ಪಾಪಗಳಿಗಾಗಿ ಕ್ರಿಸ್ತನು ಒಂದೇ ಸಾರಿ ಬಾಧೆ ಅನುಭವಿಸಿ ಸತ್ತನು.
ನೀತಿವಂತನಾಗಿದ್ದ ಆತನು ಅಪರಾಧಿಗಳಿಗಾಗಿ ಪ್ರಾಣಕೊಟ್ಟನು.
ನಿಮ್ಮೆಲ್ಲರನ್ನು ದೇವರ ಬಳಿಗೆ ನಡೆಸುವುದಕ್ಕಾಗಿ ಆತನು ಹೀಗೆ
ಮಾಡಿದನು. ಆತನ ದೇಹವು ಕೊಲ್ಲಲ್ಪಟ್ಟಿತು, ಆದರೆ ಆತನು
ಆತ್ಮಸಂಬಂಧದಲ್ಲಿ ಮತ್ತೆ ಜೀವಂತನಾದನು. 19ಬಳಿಕ ಆತನು
ಆತ್ಮರೂಪದಲ್ಲಿ ಹೋಗಿ ಸೆರೆಮನೆಯಲ್ಲಿದ್ದ ಆತ್ಮಗಳಿಗೆ
ಸುವಾರ್ತೆ ಸಾರಿದನು. 20ಬಹಳ ಹಿಂದೆ ನೋಹನ ಕಾಲದಲ್ಲಿ
ದೇವರಿಗೆ ಅವಿಧೇಯರಾಗಿದ್ದವರೇ ಅವರು. ನೋಹನು ನಾವೆ
ಯನ್ನು ಕಟ್ಟುತ್ತಿದ್ದಾಗ ದೇವರು ತಾಳ್ಮೆಯಿಂದ ಕಾಯುತ್ತಿದ್ದನು.
ಕೆಲವರು ಅಂದರೆ ಎಂಟು ಮಂದಿ ಮಾತ್ರ, ಆ ನಾವೆಯಲ್ಲಿ
ನೀರಿನ ಮೂಲಕ ರಕ್ಷಿಸಲ್ಪಟ್ಟರು. 21ಆ ನೀರು ಈಗ ನಿಮ್ಮನ್ನು
ರಕ್ಷಿಸುತ್ತಿರುವ ದೀಕ್ಷಾಸ್ನಾನದಂತಿದೆ. ದೀಕ್ಷಾಸ್ನಾನವು ಮೈಕೊಳೆ
ಯನ್ನು ತೊಳೆಯುವಂಥದ್ದಲ್ಲ. ಅದು ಪರಿಶುದ್ಧ ಹೃದಯ
ಬೇಕೆಂದು ವಿಜ್ಞಾಪಿಸಿಕೊಳ್ಳುವಂಥದ್ದಾಗಿದೆ. ಯೇಸು ಕ್ರಿಸ್ತನು
ಸಾವಿನಿಂದ ಎದ್ದು ಬಂದದ್ದರಿಂದ ಅದು ನಿಮ್ಮನ್ನು ರಕ್ಷಿಸುತ್ತದೆ.
22ಈಗ ಯೇಸು ಪರಲೋಕಕ್ಕೆ ಹೋಗಿರುವನು. ಆತನು ದೇವರ
ಬಲಗಡೆಯಲ್ಲಿದ್ದಾನೆ. ಆತನು ದೇವದೂತರನ್ನೂ ಅಧಿಕಾರಿ
ಗಳನ್ನೂ ಶಕ್ತಿಗಳನ್ನೂ ಆಳುತ್ತಿದ್ದಾನೆ.

### ಮಾರ್ಪಾಟಾದ ಜೀವಿತ

4 ಕ್ರಿಸ್ತನು ದೇಹಾರೂಢನಾಗಿದ್ದಾಗ ಸಂಕಟಪಟ್ಟನು.
ಆದ್ದರಿಂದ ಕ್ರಿಸ್ತನಲ್ಲಿದ್ದ ಮನೋಭಾವವನ್ನೇ ನೀವೂ
ಹೊಂದಿದವರಾಗಿ ನಿಮ್ಮನ್ನು ಬಲಪಡಿಸಿಕೊಳ್ಳಿರಿ. ಶಾರೀರಿಕ
ವಾಗಿ ಸಂಕಟವನ್ನು ಅನುಭವಿಸಿದ ವ್ಯಕ್ತಿಯು ಪಾಪದಿಂದ
ಮುಕ್ತನಾಗಿದ್ದಾನೆ. 2ಆದ್ದರಿಂದ ಈ ಲೋಕದಲ್ಲಿ ನೀವು ಜನರ
ಅಪೇಕ್ಷೆಗೆ ತಕ್ಕಂತೆ ಕೆಟ್ಟಕಾರ್ಯಗಳನ್ನು ಮಾಡದೆ, ದೇವರು
ಅಪೇಕ್ಷಿಸುವಂಥ ಕಾರ್ಯಗಳನ್ನೇ ಮಾಡುತ್ತಾ ಜೀವಿಸಲು
ನಿಮ್ಮನ್ನು ಬಲಪಡಿಸಿಕೊಳ್ಳಿರಿ. 3ಮೊದಲು, ನಂಬಿಕೆಯಿಲ್ಲದ
ಜನರು ಮಾಡುವಂತಹ ಕಾರ್ಯಗಳನ್ನು ಮಾಡುತ್ತಾ ಬಹಳ
ಕಾಲವನ್ನು ವ್ಯರ್ಥಗೊಳಿಸಿ ಬಿಟ್ಟಿರುವಿರಿ. ನೀವು ಲೈಂಗಿಕ ಪಾಪ
ಗಳನ್ನು ಮಾಡುತ್ತಿದ್ದಿರಿ; ಇಷ್ಟವಾದ ಕೆಟ್ಟಕಾರ್ಯಗಳನ್ನು ಮಾಡು
ತ್ತಿದ್ದಿರಿ; ಕುಡುಕರಾಗಿದ್ದಿರಿ, ಕ್ರೂರಿಗಳಾಗಿದ್ದಿರಿ; ಅಸಹ್ಯಕರವಾದ
ನಿರರ್ಥಕ ಗೋಷ್ಠಿಗಳನ್ನು ಮತ್ತು ಮದ್ಯಪಾನಗೋಷ್ಠಿಗಳನ್ನು
ನಡೆಸುತ್ತಿದ್ದಿರಿ; ವಿಗ್ರಹಾರಾಧನೆ ಮಾಡುತ್ತಿದ್ದಿರಿ. 4ನೀವು
ಅಸಹ್ಯಕರವಾದ ನಿರರ್ಥಕಗೋಷ್ಠಿಗಳನ್ನು ಮಾಡದಿರುವುದನ್ನು
ಕಂಡ ಅವಿಶ್ವಾಸಿಗಳು ನಿಮ್ಮ ವಿಷಯದಲ್ಲಿ ಆಶ್ಚರ್ಯಪಡುವರು.
ಆದುದರಿಂದಲೇ ಅವರು ನಿಮ್ಮ ಬಗ್ಗೆ ಕೆಟ್ಟ ಸಂಗತಿಗಳನ್ನು ಹೇಳು
ವರು. 5ಆದರೆ ಅವಿಶ್ವಾಸಿಗಳು ತಾವು ಮಾಡುವ ಕಾರ್ಯಗಳ
ಬಗ್ಗೆ ತಾವೇ ವಿವರಣೆಯನ್ನು ನೀಡಬೇಕಾಗುತ್ತದೆ. ಜೀವಂತ
ವಾಗಿರುವ ಮತ್ತು ಸತ್ತಿರುವ ಜನರಿಗೆ ತೀರ್ಪು ನೀಡಲು ಸಿದ್ಧ
ನಾಗಿರುವ ಕ್ರಿಸ್ತನಿಗೆ ಅವರು ವಿವರಣೆ ನೀಡಬೇಕಾಗುವುದು.
6ಸತ್ತುಹೋಗಿರುವ ಜನರಿಗೂ ಸುವಾರ್ತೆಯನ್ನು ಉಪದೇಶಿಸ
ಲಾಯಿತು. ಅವರು ಶರೀರಸಂಬಂಧವಾಗಿ ಮರಣದಂಡನೆಗೆ
ಗುರಿಯಾಗಿದ್ದರೂ ಸಹ ಆತ್ಮ ಸಂಬಂಧವಾಗಿ ದೇವರಂತೆ ಸದಾ
ಕಾಲ ಜೀವಿಸಲೆಂದೇ ಅವರಿಗೆ ಉಪದೇಶಿಸಲಾಯಿತು.

### ದೇವರ ವರಗಳಿಗೆ ಉತ್ತಮ ಕಾರ್ಯ ನಿರ್ವಾಹಕರಾಗಿರಿ

7ಎಲ್ಲಾ ಸಂಗತಿಗಳೂ ಅಂತ್ಯಗೊಳ್ಳುವ ಕಾಲ ಸಮೀಪಿಸಿದೆ.
ನೀವು ವಿವೇಕಿಗಳಾಗಿದ್ದು ನಿಮ್ಮನ್ನು ಹತೋಟಿಯಲ್ಲಿಟ್ಟು
ಕೊಳ್ಳಿರಿ. ನೀವು ಪ್ರಾರ್ಥಿಸಲು ಇದು ಸಹಾಯ ಮಾಡುತ್ತದೆ.
8ನೀವು ಒಬ್ಬರನ್ನೊಬ್ಬರು ಎಡಬಿಡದೆ ಪ್ರೀತಿಸುವುದು ಬಹಳ
ಮುಖ್ಯವಾದುದು. ಪ್ರೀತಿಯು ಅನೇಕ ಪಾಪಗಳನ್ನು ಅಡಗಿಸಿ
ಬಿಡುತ್ತದೆ. 9ಗುಣಗುಟ್ಟದೆ ಅತಿಥಿಸತ್ಕಾರ ಮಾಡಿರಿ. 10ನಿಮ್ಮಲ್ಲಿ
ಪ್ರತಿಯೊಬ್ಬರೂ ದೇವರಿಂದ ಆತ್ಮಿಕ ವರವನ್ನು ಪಡೆದು
ಕೊಂಡಿರಿ. ದೇವರು ನಿಮಗೆ ಅನೇಕ ವಿಧಗಳಲ್ಲಿ ತನ್ನ ಕೃಪೆಯನ್ನು
ದಯಪಾಲಿಸಿರುವನು. ನೀವು ದೇವರ ವರಗಳನ್ನು ಉಪ
ಯೋಗಿಸುವ ಜವಾಬ್ದಾರಿಯುತರಾದ ಸೇವಕರಾಗಿದ್ದೀರಿ. ಆದ್ದ
ರಿಂದ ಒಳ್ಳೆಯ ಸೇವಕರಾಗಿರಿ; ಪರಸ್ಪರ ಸೇವೆ ಮಾಡಲು ನಿಮ್ಮ
ವರಗಳನ್ನು ಉಪಯೋಗಿಸಿರಿ. 11ಬೋಧಿಸುವವನು ದೇವರ

---

**ನಿಮ್ಮನ್ನು … ಚಿಂತಿಸಬೇಡಿರಿ** ಯೆಶಾಯ 8:12.

ನುಡಿಗಳನ್ನೇ ಬೋಧಿಸಲಿ. ಸೇವೆ ಮಾಡುವವನು ದೇವರೇ
ದಯಪಾಲಿಸಿದ ಶಕ್ತಿಯಿಂದ ಸೇವೆ ಮಾಡಲಿ. ನೀವು ಹೀಗೆ
ಮಾಡಿದರೆ, ನೀವು ಮಾಡುವ ಪ್ರತಿಯೊಂದರಲ್ಲೂ ಯೇಸು
ಕ್ರಿಸ್ತನ ಮೂಲಕ ದೇವರಿಗೆ ಸ್ತೋತ್ರವಾಗುವುದು. ಅಧಿಕಾರವೂ
ಮಹಿಮೆಯೂ ಯುಗಯುಗಾಂತರಗಳಲ್ಲಿ ಆತನಿಗೆ ಸೇರಿದವು
ಗಳಾಗಿವೆ. ಆಮೆನ್.

### ಕ್ರೈಸ್ತನಾಗಿ ಸಂಕಟಪಡುವುದು

[12]ನನ್ನ ಸ್ನೇಹಿತರೇ, ನೀವು ಈಗ ಅನುಭವಿಸುತ್ತಿರುವ ಸಂಕಟ
ಗಳ ವಿಷಯದಲ್ಲಿ ಆಶ್ಚರ್ಯಪಡದಿರಿ. ಅವು ನಿಮ್ಮ ನಂಬಿಕೆ
ಯನ್ನು ಪರೀಕ್ಷಿಸುತ್ತಿವೆ. ವಿಪರೀತವಾದದ್ದು ನಿಮಗೆ ಸಂಭವಿಸು
ತ್ತಿದೆಯೆಂದು ಯೋಚಿಸದಿರಿ. [13]ಆದರೆ ನೀವು ಕ್ರಿಸ್ತನ ಸಂಕಟ
ಗಳನ್ನು ಹಂಚಿಕೊಳ್ಳುತ್ತಿರುವುದರಿಂದ ಸಂತೋಷಿಸಿರಿ. ಕ್ರಿಸ್ತನು
ತನ್ನ ಮಹಿಮೆಯನ್ನು ತೋರ್ಪಡಿಸುವಾಗ ನೀವು ಸಂತೋಷ
ಪಡುವಿರಿ ಮತ್ತು ಆನಂದಿಸುವಿರಿ. [14]ನೀವು ಕ್ರಿಸ್ತನನ್ನು ಅನುಸರಿ
ಸುತ್ತಿರುವುದರ ನಿಮಿತ್ತವಾಗಿ ನಿಮ್ಮ ಬಗ್ಗೆ ಜನರು ಕೆಟ್ಟದ್ದನ್ನು
ನುಡಿದರೆ ನೀವು ಭಾಗ್ಯವಂತರಾಗಿದ್ದೀರಿ. ತೇಜೋಮಯವಾದ
ಆತ್ಮನು ನಿಮ್ಮಲ್ಲಿ ನೆಲೆಗೊಂಡಿದ್ದಾನೆ. ಆತನು ದೇವರಾತ್ಮ
ನಾಗಿದ್ದಾನೆ. [15]ನೀವು ಕೆಡುಕರಾಗಬಾರದು ಅಂದರೆ ಕೊಲೆಗಾರ
ರಾಗಬಾರದು, ಕಳ್ಳರಾಗಬಾರದು ಮತ್ತು ಇತರರಿಗೆ ತೊಂದರೆ
ಕೊಡಬಾರದು. ಇಂಥವುಗಳನ್ನು ಮಾಡುವವನು ಸಂಕಟಕ್ಕೆ
ಒಳಗಾಗುವನು. ನಿಮ್ಮಲ್ಲಿ ಯಾರೂ ಆ ರೀತಿಯ ಸಂಕಟಕ್ಕೆ
ಒಳಗಾಗಬಾರದು. [16]ನೀವು ಕ್ರೈಸ್ತರಾಗಿರುವುದರಿಂದ ಸಂಕಟ
ಪಟ್ಟರೆ, ನಾಚಿಕೊಳ್ಳಬಾರದು. ಆ (ಕ್ರೈಸ್ತ) ಹೆಸರಿನ ನಿಮಿತ್ತ ನೀವು
ದೇವರಿಗೆ ಸ್ತೋತ್ರ ಮಾಡಬೇಕು. [17]ನಿಮ್ಮ ನ್ಯಾಯನಿರ್ಣಯದ
ಕಾಲ ಬಂದಿದೆ. ಅದು ದೇವರ ಕುಟುಂಬದಿಂದಲೇ ಆರಂಭ
ವಾಗುವುದು. ನಮ್ಮಲ್ಲಿಯೇ ಅದು ಆರಂಭವಾದರೆ, ದೇವರ
ಸುವಾರ್ತೆಗೆ ವಿಧೇಯರಾಗದ ಜನರಿಗೆ ಏನಾಗಬಹುದು?

[18]“ನೀತಿವಂತನೇ ರಕ್ಷಣೆ ಹೊಂದಲು ಕಷ್ಟವಾದರೆ
ಭಕ್ತಿಹೀನನ ಮತ್ತು ಪಾಪಿಷ್ಠನ ಗತಿ
ಯೇನು?”*

[19]ಆದ್ದರಿಂದ ದೇವರ ಅಪೇಕ್ಷೆಯಂತೆ ಸಂಕಟಪಡುವವರು
ತಮ್ಮ ಜೀವಾತ್ಮಗಳನ್ನು ಆತನಿಗೆ ಒಪ್ಪಿಸಿಕೊಡಬೇಕು. ಅವರನ್ನು
ಸೃಷ್ಟಿಸಿದಾತನು ದೇವರೇ. ಆದ್ದರಿಂದ ಅವರು ಆತನಲ್ಲಿ ಭರವಸ
ವಿಡತಕ್ಕದ್ದು. ಹೀಗಿರಲಾಗಿ ಅವರು ಒಳ್ಳೆಯದನ್ನು ಮಾಡುತ್ತಲೇ
ಇರಬೇಕು.

### ದೇವರ ಮಂದೆ

5 ನಿಮ್ಮ ಸಭಾಹಿರಿಯರಿಗೆ ನಾನು ಈಗ ಕೆಲವು ಮಾತು
ಗಳನ್ನು ಹೇಳಬೇಕಾಗಿದೆ. ನಾನೂ ಒಬ್ಬ ಹಿರಿಯನಾಗಿ
ದ್ದೇನೆ. ನಾನು ಕ್ರಿಸ್ತನ ಬಾಧೆಗಳನ್ನು ಕಣ್ಣಾರೆ ನೋಡಿದ್ದೇನೆ.
ನಮಗೆ ಪ್ರತ್ಯಕ್ಷವಾಗುವ ಪ್ರಭಾವದಲ್ಲಿ ನಾನೂ ಪಾಲುಗಾರ
ನಾಗಿದ್ದೇನೆ. [2]ನೀವು ಜವಾಬ್ದಾರಿ ವಹಿಸಿಕೊಂಡಿರುವ ಸಭೆ
ಯನ್ನು ಪರಿಪಾಲಿಸಬೇಕೆಂದು ನಾನು ನಿಮ್ಮನ್ನು ಬೇಡಿಕೊಳ್ಳು
ತ್ತೇನೆ. ಅವರು ದೇವರ ಮಂದೆ. ನೀವು ಆ ಮಂದೆಯನ್ನು
ಕಾಯಿರಿ, ಏಕೆಂದರೆ ಅದು ನಿಮ್ಮ ಬಯಕೆಯಾಗಿದೆ; ಅದು ಬಲ
ವಂತದಿಂದ ಹೊರಿಸಿದ ಹೊರೆಯಲ್ಲ. ದೇವರು ಅದನ್ನೇ ಇಷ್ಟ
ಪಡುತ್ತಾನೆ. ನೀವು ಆ ಮಂದೆಯನ್ನು ಕಾಯುವುದು ಹಣದ
ನಿಮಿತ್ತವಲ್ಲ. ದೇವರ ಸೇವೆ ಮಾಡಲು ನಿಮಗಿರುವ ಸಂತಸದ
ನಿಮಿತ್ತವಾಗಿಯೇ. [3]ನೀವು ಜವಾಬ್ದಾರರಾಗಿರುವ ಆ
ಮಂದೆಯ ಮೇಲೆ ದಬ್ಬಾಳಿಕೆ ಮಾಡಬೇಡಿ. ನೀವು ಅವರಿಗೆ
ಉತ್ತಮ ಮಾದರಿಯಾಗಿರಿ.
[4]ಪ್ರಧಾನ ಕುರುಬನು (ಕ್ರಿಸ್ತನು) ಪ್ರತ್ಯಕ್ಷನಾದಾಗ, ನಿಮಗೆ
ಕಿರೀಟವು ಲಭಿಸುವುದು. ಮಹಾ ಪ್ರಭಾವವನ್ನು ಹೊಂದಿರುವ
ಆ ಕಿರೀಟವು ತನ್ನ ಸೌಂದರ್ಯವನ್ನು ಕಳೆದುಕೊಳ್ಳುವುದೇ
ಇಲ್ಲ.
[5]ಯುವಕರೇ, ನಾನು ನಿಮಗೂ ಕೆಲವು ಮಾತುಗಳನ್ನು
ಹೇಳಬೇಕಾಗಿದೆ. ನೀವು ಹಿರಿಯರಿಗೆ ಅಧೀನರಾಗಿರಬೇಕು.
ನೀವೆಲ್ಲರೂ ಒಬ್ಬರಿಗೊಬ್ಬರು ನಮ್ರತೆಯಿಂದ ನಡೆದು
ಕೊಳ್ಳಬೇಕು.

“ದೇವರು ಅಹಂಕಾರಿಗಳಿಗೆ ವಿರುದ್ಧನಾಗಿದ್ದಾನೆ.
ಆದರೆ ಆತನು ನಮ್ರತೆಯಿಂದ ಇರುವ ಜನರಿಗೆ
ಕೃಪೆಯನ್ನು ದಯಪಾಲಿಸುವನು.”
*ಜ್ಞಾನೋಕ್ತಿ 3:34*

[6]ಆದುದರಿಂದ ದೇವರ ಶಕ್ತಿಯುತವಾದ ಹಸ್ತದ ಕೆಳಗೆ
ನಮ್ರತೆಯಿಂದಿರಿ. ಯೋಗ್ಯಕಾಲವು ಸಮೀಪಿಸಿದಾಗ ಆತನು
ನಿಮ್ಮನ್ನು ಮೇಲೆತ್ತುವನು. [7]ಆತನು ನಿಮ್ಮನ್ನು ಪರಿಪಾಲಿಸುವು
ದರಿಂದ ನಿಮ್ಮ ಚಿಂತೆಗಳನ್ನೆಲ್ಲಾ ಆತನಿಗೆ ಒಪ್ಪಿಸಿರಿ.
[8]ಸ್ವಸ್ಥಚಿತ್ತವಾಗಿರಿ ಮತ್ತು ಎಚ್ಚರವಾಗಿರಿ! ಸೈತಾನನು ನಿಮ್ಮ
ಶತ್ರು. ಗರ್ಜಿಸುವ ಸಿಂಹವು ಯಾರನ್ನು ತಿನ್ನಲಿ ಎಂದು ಹುಡುಕು
ತ್ತಿರುವಂತೆ ಅವನು ಮನುಷ್ಯನನ್ನು ಹುಡುಕುತ್ತಿದ್ದಾನೆ. ಅವನನ್ನು
ಎದುರಿಸಿರಿ. [9]ನಿಮ್ಮ ನಂಬಿಕೆಯಲ್ಲಿ ಸ್ಥಿರವಾಗಿರಿ, ಲೋಕದಲ್ಲಿ
ರುವ ನಿಮ್ಮ ಸಹೋದರ ಸಹೋದರಿಯರೆಲ್ಲರೂ ನಿಮಗಿರು
ವಂಥ ಬಾಧೆಗಳನ್ನು ಅನುಭವಿಸುತ್ತಿದ್ದಾರೆಂಬುದು ನಿಮಗೆ
ತಿಳಿದಿದೆ.
[10]ಹೌದು, ನೀವು ಸ್ವಲ್ಪಕಾಲ ಮಾತ್ರ ಸಂಕಟವನ್ನು ಅನುಭವಿ
ಸುವಿರಿ. ಆದರೆ ಅನಂತರ ದೇವರು ಎಲ್ಲವನ್ನು ಸರಿಪಡಿಸುತ್ತಾನೆ.
ಆತನು ನಿಮ್ಮನ್ನು ಬಲಪಡಿಸುತ್ತಾನೆ. ನೀವು ಕೆಳಕ್ಕೆ ಬೀಳದಂತೆ
ಆತನು ನಿಮಗೆ ಆಧಾರವಾಗುವನು. ಎಲ್ಲರಿಗೂ ಕೃಪೆಯನ್ನು
ತೋರುವ ದೇವರು ಆತನೇ. ತನ್ನ ಪ್ರಭಾವದಲ್ಲಿ ಪಾಲುಗಾರ
ರಾಗಲು ಕ್ರಿಸ್ತನೇ ನಿಮ್ಮನ್ನು ಕರೆದನು. ಆ ಪ್ರಭಾವವು ಶಾಶ್ವತ
ವಾದದ್ದು. [11]ಸರ್ವಾಧಿಪತ್ಯವು ಎಂದೆಂದಿಗೂ ಆತನದೇ.
ಆಮೆನ್.

### ಅಂತಿಮ ಶುಭಾಶಯಗಳು

[12]ನಾನು ಈ ಕಿರುಪತ್ರವನ್ನು ಸಿಲ್ವಾನನ ನೆರವಿನಿಂದ
ಬರೆದೆನು. ಅವನು ಕ್ರಿಸ್ತನಲ್ಲಿ ನಂಬಿಗಸ್ತನಾದ ಸಹೋದರ
ನೆಂಬುದು ನನಗೆ ತಿಳಿದಿದೆ. ನಾನು ನಿಮ್ಮನ್ನು ಸಂತೈಸಲು ಮತ್ತು

---

**ನೀತಿವಂತನೇ … ಗತಿಯೇನು?** ಜ್ಞಾನೋಕ್ತಿ 11:31.

ಪ್ರೋತ್ಸಾಹಿಸಲು ಈ ಪತ್ರವನ್ನು ಬರೆದೆನು. ಇದುವೇ ದೇವರ ನಿಜವಾದ ಕೃಪೆ ಎಂಬುದನ್ನು ನಿಮಗೆ ತಿಳಿಸಬೇಕೆಂಬುದೇ ನನ್ನ ಅಪೇಕ್ಷೆಯಾಗಿತ್ತು. ಆ ಕೃಪೆಯಲ್ಲಿ ಸ್ಥಿರತೆಯಿಂದಿರಿ.

[13]ಬಾಬಿಲೋನಿನಲ್ಲಿರುವ ಸಭೆಯವರು ನಿಮಗೆ ವಂದನೆಗಳನ್ನು ತಿಳಿಸಿದ್ದಾರೆ. ನಿಮ್ಮನ್ನು ಆರಿಸಿಕೊಂಡಂತೆಯೇ ಆ ಜನರನ್ನೂ ಆರಿಸಿಕೊಳ್ಳಲಾಗಿದೆ. ಕ್ರಿಸ್ತನಲ್ಲಿ ನನ್ನ ಮಗನಾದ ಮಾರ್ಕನೂ ನಿಮಗೆ ವಂದನೆಗಳನ್ನು ತಿಳಿಸಿದ್ದಾನೆ.
[14]ನೀವು ಭೇಟಿ ಮಾಡಿದಾಗ ಒಬ್ಬರಿಗೊಬ್ಬರು ಪ್ರೀತಿಯ ಮುದ್ದನ್ನು ನೀಡಿರಿ.

ಕ್ರಿಸ್ತನಲ್ಲಿರುವ ನಿಮಗೆಲ್ಲರಿಗೂ ಶಾಂತಿಯಿರಲಿ.

# ಪೇತ್ರನು ಬರೆದ ಎರಡನೆ ಪತ್ರ

1 ಯೇಸು ಕ್ರಿಸ್ತನ ಸೇವಕನೂ ಅಪೊಸ್ತಲನೂ ಆದ
ಸಿಮೆಯೋನ ಪೇತ್ರನು ನಮ್ಮೊಂದಿಗೆ ಅಮೂಲ್ಯವಾದ
ನಂಬಿಕೆಯನ್ನು ಹೊಂದಿರುವ ಜನರೆಲ್ಲರಿಗೂ ಬರೆಯುವ ಪತ್ರ.
ನಮ್ಮ ದೇವರೂ ರಕ್ಷಕನೂ ಆಗಿರುವ ಯೇಸು ಕ್ರಿಸ್ತನು ನೀತಿ
ವಂತನಾಗಿರುವುದರಿಂದ ನೀವು ಆ ನಂಬಿಕೆಯನ್ನು ಪಡೆದು
ಕೊಂಡಿರಿ. ಆತನು ಯೋಗ್ಯವಾದದ್ದನ್ನೇ ಮಾಡುತ್ತಾನೆ.
2 ನಿಮಗೆ ಕೃಪೆಯೂ ಶಾಂತಿಯೂ ಹೆಚ್ಚೆಚ್ಚಾಗಿ ದೊರೆಯಲಿ.
ದೇವರನ್ನು ಮತ್ತು ನಮ್ಮ ಪ್ರಭುವಾದ ಯೇಸುವನ್ನು ನೀವು
ನಿಜವಾಗಿಯೂ ತಿಳಿದಿರುವುದರಿಂದ ನಿಮಗೆ ಕೃಪೆಯೂ
ಶಾಂತಿಯೂ ದೊರೆಯಲಿ.

### ನಮಗೆ ಬೇಕಾದುದನ್ನೆಲ್ಲಾ ದೇವರು ದಯಪಾಲಿಸಿದ್ದಾನೆ

3 ಯೇಸುವಿಗೆ ದೇವರ ಶಕ್ತಿಯಿದೆ. ಜೀವಿಸಲು ಮತ್ತು ದೇವರ
ಸೇವೆ ಮಾಡಲು ಬೇಕಾದ ಪ್ರತಿಯೊಂದನ್ನು ಆತನ ಶಕ್ತಿಯು
ನಮಗೆ ಒದಗಿಸಿದೆ. ನಾವು ಆತನನ್ನು ಬಲ್ಲವರಾದ್ದರಿಂದಲೇ
ಅವುಗಳನ್ನು ಪಡೆದುಕೊಂಡಿದ್ದೇವೆ. ಯೇಸು ತನ್ನ ಪ್ರಭಾವ
ದಿಂದಲೂ ಗುಣಾತಿಶಯದಿಂದಲೂ ನಮ್ಮನ್ನು ಕರೆದನು.
4 ಯೇಸು ತಾನು ಮಾಡಿದ ವಾಗ್ದಾನದಂತೆ, ತನ್ನ ಪ್ರಭಾವ ಮತ್ತು
ಗುಣಾತಿಶಯಗಳ ಮೂಲಕ ನಮಗೆ ಅಮೂಲ್ಯವಾದ ಹಾಗೂ
ಉತ್ಕೃಷ್ಟವಾದ ವರಗಳನ್ನು ದಯಪಾಲಿಸಿರುವನು. ಆ ವರ
ಗಳಿಂದ ನೀವು ದೇವರ ಗುಣಾತಿಶಯದಲ್ಲಿ ಪಾಲುಗಾರ
ರಾಗಲು ಸಾಧ್ಯ. ಹೀಗಿರಲಾಗಿ ನೀವು ಈ ಲೋಕದಲ್ಲಿ ದುರಾಶೆ
ಯಿಂದುಂಟಾಗುವ ಕೆಟ್ಟತನಕ್ಕೆ ತಪ್ಪಿಸಿಕೊಂಡವರಾಗಿದ್ದೀರಿ.
5 ನೀವು ಈ ಆಶೀರ್ವಾದಗಳನ್ನು ಹೊಂದಿರುವುದರಿಂದ ಅವು
ಗಳನ್ನು ನಿಮ್ಮ ಜೀವಿತಕ್ಕೆ ಅಳವಡಿಸಿಕೊಳ್ಳಲು ನಿಮ್ಮಿಂದ ಸಾಧ್ಯ
ವಾದಷ್ಟು ಪ್ರಯತ್ನಿಸಿ. ನಿಮ್ಮ ನಂಬಿಕೆಗೆ ಸದ್ಗುಣವನ್ನೂ ಸದ್ಗುಣಕ್ಕೆ
ಜ್ಞಾನವನ್ನೂ 6 ಜ್ಞಾನಕ್ಕೆ ದಮೆಯನ್ನೂ ದಮೆಗೆ ತಾಳ್ಮೆಯನ್ನೂ
ತಾಳ್ಮೆಗೆ ದೇವರ ಸೇವೆಯನ್ನೂ 7 ದೇವರ ಸೇವೆಗೆ ಸಹೋದರ
ಸ್ನೇಹವನ್ನೂ ಸಹೋದರ ಸ್ನೇಹಕ್ಕೆ ಪ್ರೀತಿಯನ್ನೂ ಸೇರಿಸಿರಿ.
8 ಇವೆಲ್ಲವೂ ನಿಮ್ಮಲ್ಲಿದ್ದು ಬೆಳೆಯುತ್ತಿದ್ದರೆ, ನೀವು ಎಂದಿಗೂ
ನಿರರ್ಥಕರಾಗದಂತೆ ಇವು ನಿಮಗೆ ಸಹಾಯ ಮಾಡುತ್ತವೆ. ನಮ್ಮ
ಪ್ರಭುವಾದ ಯೇಸು ಕ್ರಿಸ್ತನ ಜ್ಞಾನದಲ್ಲಿ ಎಂದಿಗೂ ಅಯೋಗ್ಯ
ರೆನಿಸಿಕೊಳ್ಳದಂತೆ ಇವು ನಿಮಗೆ ಸಹಾಯಮಾಡುತ್ತವೆ. 9 ಆದರೆ
ಇವು ಯಾವನಲ್ಲಿ ಇರುವುದಿಲ್ಲವೊ ಅವನು ಸ್ಪಷ್ಟವಾಗಿ ನೋಡ
ಲಾರನು. ಅವನು ಕುರುಡನಾಗಿದ್ದಾನೆ; ತಾನು ಶುದ್ಧನಾದದ್ದನ್ನು
ಮರೆತವನಾಗಿದ್ದಾನೆ.
10 ನನ್ನ ಸಹೋದರ ಸಹೋದರಿಯರೇ, ದೇವರು ನಿಮ್ಮನ್ನು
ತನ್ನವರನ್ನಾಗಿ ಆರಿಸಿಕೊಳ್ಳಲು ಕರೆದನು. ಆದ್ದರಿಂದಲೇ ನೀವು
ದೇವರಿಂದ ನಿಜವಾಗಿಯೂ ಕರೆಯಲ್ಪಟ್ಟವರೆಂದೂ ಆರಿಸಲ್ಪ
ಟ್ಟವರೆಂದೂ ತೋರಿಸಲು ಬಹಳವಾಗಿ ಪ್ರಯತ್ನಿಸಿರಿ. ಹೀಗೆ
ನೀವು ಮಾಡಿದರೆ ಎಂದಿಗೂ ಎಡವಿಬೀಳುವುದಿಲ್ಲ. 11 ನಮ್ಮ
ಪ್ರಭುವಾದ ಮತ್ತು ರಕ್ಷಕನಾದ ಯೇಸು ಕ್ರಿಸ್ತನ ರಾಜ್ಯದಲ್ಲಿ
ನಿಮಗೆ ಮಹಾ ಸ್ವಾಗತವನ್ನು ನೀಡಲಾಗುವುದು. ಆ ರಾಜ್ಯವು
ಶಾಶ್ವತವಾದದ್ದು.
12 ಇವೆಲ್ಲವೂ ನಿಮಗೆ ತಿಳಿದಿದೆ. ನಿಮ್ಮಲ್ಲಿರುವ ಸತ್ಯದಲ್ಲಿ ನೀವು
ಸ್ಥಿರವಾಗಿದ್ದೀರಿ. ಆದರೆ ಇವುಗಳನ್ನು ನೀವು ಜ್ಞಾಪಕ ಮಾಡಿ
ಕೊಳ್ಳುವಂತೆ ನಾನು ನಿಮಗೆ ಯಾವಾಗಲೂ ಸಹಾಯ ಮಾಡು
ತ್ತೇನೆ. 13 ನಾನು ಈ ಲೋಕದಲ್ಲಿ ಇನ್ನೂ ಜೀವದಿಂದಿರು
ವಾಗಲೇ ಇವುಗಳನ್ನು ನಿಮ್ಮ ನೆನಪಿಗೆ ತರುವುದು ಯೋಗ್ಯವಾದ
ದ್ದೆಂಬುದು ನನ್ನ ಆಲೋಚನೆ. 14 ನಾನು ಬಹುಬೇಗ ಈ ದೇಹ
ವನ್ನು ತ್ಯಜಿಸಬೇಕೆಂಬುದೂ ನನಗೆ ತಿಳಿದಿದೆ. ನಮ್ಮ ಪ್ರಭುವಾದ
ಯೇಸು ಕ್ರಿಸ್ತನು ಅದನ್ನು ತೋರ್ಪಡಿಸಿದ್ದಾನೆ.* 15 ನೀವು
ಇವುಗಳನ್ನು ಯಾವಾಗಲೂ ನೆನಪುಮಾಡಿಕೊಳ್ಳಲು ನಿಮಗೆ
ನನ್ನಿಂದಾದಷ್ಟು ಸಹಾಯ ಮಾಡಲು ನಾನು ಪ್ರಯತ್ನಿಸುತ್ತೇನೆ.
ನಾನು ಈ ಲೋಕವನ್ನು ಬಿಟ್ಟುಹೋದ ನಂತರವೂ ನೀವು ಈ
ಸಂಗತಿಗಳನ್ನು ನೆನಪು ಮಾಡಿಕೊಳ್ಳಲು ಸಮರ್ಥರಾಗಿರ
ಬೇಕೆಂಬುದು ನನ್ನ ಅಪೇಕ್ಷೆ.

### ಕ್ರಿಸ್ತನ ಮಹಿಮೆಯನ್ನು ನಾವು ನೋಡಿದೆವು

16 ನಮ್ಮ ಪ್ರಭುವಾದ ಯೇಸು ಕ್ರಿಸ್ತನ ಶಕ್ತಿಯ ಕುರಿತಾಗಿ
ಮತ್ತು ಆತನ ಬರುವಿಕೆಯ ಕುರಿತಾಗಿ ನಿಮಗೆ ತಿಳಿಸಿದ್ದೇವೆ. ಆ
ಸಂಗತಿಗಳು ಜನರಿಂದ ಕಲ್ಪಿತವಾದ ಜಾಣ್ಮೆಯ ಕಥೆಗಳಲ್ಲ.
ಯೇಸುವಿನ ಮಹಿಮೆಯನ್ನು ನಾವು ಕಣ್ಣಾರೆ ಕಂಡಿದ್ದೇವೆ.
17 ಆತನು ಅತ್ಯಂತ ಪ್ರಭಾವವುಳ್ಳ (ದೇವರ) ಸ್ವರವನ್ನು ಕೇಳಿ
ದನು. ಆವಾಗಲೇ ಆತನು ತಂದೆಯಾದ ದೇವರಿಂದ ಮಾನ
ವನ್ನೂ ಪ್ರಭಾವವನ್ನೂ ಹೊಂದಿಕೊಂಡನು. ಆ ಸ್ವರವು,
‘‘ಈತನು ನನ್ನ ಪ್ರಿಯ ಮಗ. ಈತನನ್ನು ಬಹಳವಾಗಿ ಮೆಚ್ಚಿ
ಕೊಂಡಿದ್ದೇನೆ’’ ಎಂದು ಹೇಳಿತು. 18 ನಾವು ಪವಿತ್ರ ಪರ್ವತದ
ಮೇಲೆ ಯೇಸುವಿನ ಜೊತೆಯಲ್ಲಿದ್ದಾಗ ಪರಲೋಕದಿಂದ
ಬಂದ ಆ ಧ್ವನಿಯನ್ನು ನಾವೂ ಕೇಳಿದೆವು.*
19 ಪ್ರವಾದಿಗಳು ಹೇಳಿದ ಸಂಗತಿಗಳನ್ನು ಇದು ನಮಗೆ
ಮತ್ತಷ್ಟು ಖಚಿತಪಡಿಸಿತು. ಅವರು ಹೇಳಿದ್ದನ್ನು ನೀವು ಚಾಚು
ತಪ್ಪದೆ ಅನುಸರಿಸುವುದು ಒಳ್ಳೆಯದೇ ಸರಿ. ಅವರು ಹೇಳಿದ
ಸಂಗತಿಗಳು ಅಂಧಕಾರದಲ್ಲಿ ಪ್ರಕಾಶಿಸುವ ಬೆಳಕಿನಂತಿವೆ. ನಿಮ್ಮ

---

**ವಚನ 14** ನೋಡಿರಿ ಯೋಹಾನ 21:18-19.

**ವಚನ 18** ಮತ್ತಾಯ 17:1-9.

ಹೃದಯಗಳಲ್ಲಿ ಹಗಲು ಆರಂಭವಾಗಿ, ಮುಂಜಾನೆಯ
ನಕ್ಷತ್ರವು ಮೂಡುವವರೆಗೂ ಆ ಬೆಳಕು ಪ್ರಕಾಶಿಸುತ್ತದೆ.
[20]ನೀವು ಅರ್ಥಮಾಡಿಕೊಳ್ಳಬೇಕಾದ ಮುಖ್ಯವಾದ ಸಂಗತಿ
ಯೇನಂದರೆ, ಪವಿತ್ರ ಗ್ರಂಥದಲ್ಲಿರುವ ಯಾವ ಪ್ರವಾದನಾ
ವಾಕ್ಯವೂ ಒಬ್ಬ ವ್ಯಕ್ತಿಯ ವೈಯಕ್ತಿಕ ವಿವರಣೆಯಿಂದ ಬಂದಿಲ್ಲ.
[21]ಯಾವ ಪ್ರವಾದನೆಯೇ ಆಗಲಿ ಮನುಷ್ಯನ ಚಿತ್ತದಿಂದ
ಬಂದಿಲ್ಲ. ಆದರೆ ಜನರು ಪವಿತ್ರಾತ್ಮನಿಂದ ನಡೆಸಲ್ಪಟ್ಟು ದೇವ
ರಿಂದ ಹೊಂದಿದ್ದನ್ನೇ ಮಾತನಾಡಿದರು.

### ಸುಳ್ಳುಬೋಧಕರು

2 ಹಿಂದಿನ ಕಾಲದಲ್ಲಿ, ದೇವಜನರಲ್ಲಿ ಸುಳ್ಳು ಪ್ರವಾದಿ
ಗಳಿದ್ದರು. ಈಗಲೂ ಇದ್ದಾರೆ. ನಿಮ್ಮಲ್ಲಿಯೂ ಸಹ ಕೆಲವು
ಸುಳ್ಳುಪ್ರವಾದಿಗಳಿರುತ್ತಾರೆ. ಜನರನ್ನು ನಾಶನಕ್ಕೆ ನಡೆಸುವ
ಸುಳ್ಳುಬೋಧನೆಗಳನ್ನು ಅವರು ಬೋಧಿಸುತ್ತಾರೆ. ತಾವು ಸುಳ್ಳು
ಬೋಧಕರೆಂಬುದು ನಿಮಗೆ ಸುಲಭವಾಗಿ ತಿಳಿಯದ ರೀತಿ
ಯಲ್ಲಿ ಅವರು ಬೋಧಿಸುತ್ತಾರೆ. ಅವರು ತಮಗೆ ಬಿಡುಗಡೆ
ತಂದು ಕೊಟ್ಟ ಒಡೆಯನನ್ನೇ (ಯೇಸು) ಒಪ್ಪಿಕೊಳ್ಳುವುದಿಲ್ಲ.
ಆದ್ದರಿಂದ ಅವರು ಬಹುಬೇಗನೆ ತಮ್ಮನ್ನು ತಾವೇ ನಾಶಪಡಿಸಿ
ಕೊಳ್ಳುತ್ತಾರೆ. [2]ಅವರು ಮಾಡುವ ಕೆಟ್ಟ ಕಾರ್ಯಗಳನ್ನು ಅನೇಕ
ಜನರು ಅನುಸರಿಸುತ್ತಾರೆ. ಆ ಜನರ ದೆಸೆಯಿಂದ ಸತ್ಯಮಾರ್ಗದ
ಕುರಿತಾಗಿ ಇತರರು ಕೆಟ್ಟಮಾತುಗಳನ್ನು ಆಡುತ್ತಾರೆ. [3]ಆ ಸುಳ್ಳು
ಬೋಧಕರಿಗೆ ಬೇಕಾಗಿರುವುದು ಕೇವಲ ನಿಮ್ಮ ಹಣವಷ್ಟೇ.
ಆದ್ದರಿಂದ ಅವರು ನಿಜವಲ್ಲದ ಸಂಗತಿಗಳನ್ನು ನಿಮಗೆ ಹೇಳಿ
ನಿಮ್ಮನ್ನು ಬಳಸಿಕೊಳ್ಳುತ್ತಾರೆ. ಆದರೆ ಬಹಳ ಹಿಂದಿನಿಂದಲೇ ಆ
ಸುಳ್ಳುಬೋಧಕರ ವಿರುದ್ಧವಾದ ತೀರ್ಪು ಸಿದ್ಧವಾಗಿದೆ.
ಅವರನ್ನು ನಾಶಪಡಿಸುವಾತನಿಂದ (ದೇವರಿಂದ) ಅವರು ತಪ್ಪಿಸಿ
ಕೊಳ್ಳಲು ಸಾಧ್ಯವಿಲ್ಲ.

[4]ದೇವದೂತರು ಪಾಪಗಳನ್ನು ಮಾಡಿದಾಗ, ದೇವರು ಅವ
ರನ್ನು ದಂಡಿಸದೆ ಬಿಡಲಿಲ್ಲ. ಆತನು ಅವರನ್ನು ನರಕಕ್ಕೆ ದಬ್ಬಿ
ದನು. ಕತ್ತಲೆಯ ಗುಂಡಿಗಳಿಗೆ ಹಾಕಿದನು. ಅವರಿಗೆ ನ್ಯಾಯ
ತೀರ್ಪಾಗುವವರೆಗೂ ಅವರು ಅಲ್ಲಿಯೇ ಇರುವರು. [5]ಬಹಳ
ಹಿಂದೆ ಬದುಕಿದ್ದ ಕೆಟ್ಟ ಜನರನ್ನು ದೇವರು ದಂಡಿಸಿದನು. ಈ
ಲೋಕದಲ್ಲಿ ತನಗೆ ವಿರುದ್ಧವಾದ ಜನರು ತುಂಬಿಕೊಂಡಿದ್ದಾಗ
ಆತನು ಜಲಪ್ರಳಯವನ್ನು ಬರಮಾಡಿದನು. ಆದರೆ ನೋಹ
ನನ್ನೂ ಅವನೊಂದಿಗಿದ್ದ ಏಳು ಮಂದಿಯನ್ನೂ ರಕ್ಷಿಸಿದನು.
ಯೋಗ್ಯರಾಗಿ ಜೀವಿಸಬೇಕೆಂದು ಆ ಜನರಿಗೆ ತಿಳಿಸಿದವನೇ
ನೋಹ. [6]ದೇವರು ಸೊದೋಮ್, ಗೊಮೋರ ಎಂಬ ಕೆಟ್ಟ
ಪಟ್ಟಣಗಳನ್ನು ದಂಡಿಸಿದನು. ಆತನು ಆ ಪಟ್ಟಣಗಳಲ್ಲಿ ಏನೂ
ಉಳಿಯದಂತೆ, ಸುಟ್ಟು ಬೂದಿಮಾಡಿದನು. ತನಗೆ ವಿರುದ್ಧ
ವಾಗಿರುವ ಜನರಿಗೆ ಏನಾಗುತ್ತದೆ ಎಂಬುದಕ್ಕೆ ಆತನು ಆ ಪಟ್ಟಣ
ಗಳನ್ನು ನಿದರ್ಶನಗಳನ್ನಾಗಿ ಇಟ್ಟಿದ್ದಾನೆ. [7]ಆದರೆ ದೇವರು ಆ
ಪಟ್ಟಣಗಳಿಂದ ಲೋಟನನ್ನು ರಕ್ಷಿಸಿದನು. ಲೋಟನು ನೀತಿ
ವಂತನಾಗಿದ್ದನು. ಕೆಟ್ಟ ಜನರ ಕೆಟ್ಟ ಬದುಕಿನಿಂದ ಅವನು ದುಃಖ
ಗೊಂಡಿದ್ದನು. [8](ಲೋಟನು ನೀತಿವಂತನಾಗಿದ್ದನು. ಆದರೆ
ಅವನು ಪ್ರತಿದಿನವೂ ಆ ಕೆಟ್ಟ ಜನರ ಮಧ್ಯ ಜೀವಿಸುತ್ತಿದ್ದನು.
ಕೆಟ್ಟಕಾರ್ಯಗಳನ್ನು ನೋಡಿ ಮತ್ತು ಕೇಳಿ ಅವನ ಒಳ್ಳೆಯ
ಹೃದಯವು ವೇದನೆಗೆ ಒಳಗಾಗಿತ್ತು.) [9]ಹೌದು, ಪ್ರಭುವಾದ
ದೇವರು ತನ್ನ ಭಕ್ತರನ್ನು ತೊಂದರೆಗಳಿಂದ ಯಾವಾಗಲೂ
ರಕ್ಷಿಸುತ್ತಾನೆ. ಆತನು ಕೆಟ್ಟ ಜನರನ್ನು ಹಿಡಿದು ನ್ಯಾಯತೀರ್ಪಿನ
ದಿನ ಬರುವತನಕ ದಂಡಿಸುತ್ತಾನೆ. [10]ಪ್ರಭುವಿನ ಅಧಿಕಾರವನ್ನು
ದ್ವೇಷಿಸುವ ಜನರನ್ನು ಮತ್ತು ತಮ್ಮ ಪಾಪಸ್ವಭಾವದ ಇಚ್ಫೆಗನು
ಸಾರವಾಗಿ ಕೆಟ್ಟಕಾರ್ಯಗಳನ್ನು ಮಾಡುವ ಜನರನ್ನು ದೇವರು
ಹೀಗೆ ದಂಡಿಸುತ್ತಾನೆ.

ಈ ಸುಳ್ಳುಬೋಧಕರು ತಮಗೆ ಬೇಕಾದದ್ದನ್ನೆಲ್ಲಾ ಮಾಡು
ತ್ತಾರೆ ಮತ್ತು ತಮ್ಮ ಬಗ್ಗೆ ಹೊಗಳಿಕೊಳ್ಳುತ್ತಾರೆ. ಪ್ರಭಾವದಿಂದ
ಕೂಡಿರುವ ದೇವದೂತರ ಬಗ್ಗೆ ಕೆಟ್ಟದ್ದನ್ನು ಹೇಳಲು ಅವರು
ಹೆದರುವುದಿಲ್ಲ. [11]ದೇವದೂತರು ಈ ಸುಳ್ಳುಬೋಧಕರಿಗಿಂತ
ಹೆಚ್ಚು ಬಲಿಷ್ಠರಾಗಿದ್ದಾರೆ ಮತ್ತು ಹೆಚ್ಚು ಶಕ್ತಿಯುಳ್ಳವ
ರಾಗಿದ್ದಾರೆ. ಆದರೂ ದೇವದೂತರು ಸುಳ್ಳುಬೋಧಕರನ್ನು
ಪ್ರಭುವಿನ ಸನ್ನಿಧಿಯಲ್ಲಿ ದೂಷಿಸುವುದಿಲ್ಲ. [12]ಆದರೆ ಈ ಸುಳ್ಳು
ಬೋಧಕರು ತಮಗೆ ಅರ್ಥವಾಗದ ಸಂಗತಿಗಳ ವಿರುದ್ಧ
ಕೆಟ್ಟದ್ದನ್ನು ಮಾತಾಡುತ್ತಾರೆ. ಅವರು ವಿವೇಚಿಸದೆ ಕಾರ್ಯ
ಮಾಡುವ ಪ್ರಾಣಿಗಳಂತಿದ್ದಾರೆ. ಹಿಡಿಯಲ್ಪಟ್ಟು ಕೊಲ್ಲಲ್ಪಡು
ವುದಕ್ಕಾಗಿಯೇ ಹುಟ್ಟಿರುವ ಕ್ರೂರ ಪ್ರಾಣಿಗಳಂತೆ ಅವರು
ನಾಶವಾಗುವರು. [13]ಅವರಿಂದ ಅನೇಕ ಜನರು ಸಂಕಟಕ್ಕೆ ಒಳ
ಗಾಗುವರು. ಅವರು ಮಾಡಿದ್ದಕ್ಕೆ ಅದೇ ಪ್ರತಿಫಲವಾಗಿರು
ವುದು. ಈ ಸುಳ್ಳುಬೋಧಕರು ಜನರೆಲ್ಲರ ಎದುರಿನಲ್ಲಿ ಕೆಟ್ಟ
ದ್ದನ್ನು ಮಾಡಲು ಸಂತೋಷಿಸುತ್ತಾರೆ. ತಮ್ಮನ್ನು ಸಂತಸ
ಗೊಳಿಸುವ ಕೆಟ್ಟಕಾರ್ಯಗಳಿಂದ ಅವರು ಆನಂದಿಸುತ್ತಾರೆ.
ಅವರು ನಿಮ್ಮ ಮಧ್ಯದಲ್ಲಿ ಕೊಳಕಾದ ಕಲೆಗಳಂತಿದ್ದಾರೆ. ನೀವು
ಒಟ್ಟಾಗಿ ಊಟ ಮಾಡುವಾಗ ಅವರು ನಿಮಗೆ ಅಪಮಾನಕರ
ವಾಗಿದ್ದಾರೆ.

[14]ಅವರು ಜಾರತ್ವದಿಂದ ತುಂಬಿದ ಮತ್ತು ಪಾಪವನ್ನು
ಬಿಡಲೊಲ್ಲದ ಕಣ್ಣುಳ್ಳವರಾಗಿದ್ದಾರೆ. ಅವರು ದುರ್ಬಲರನ್ನು
ಪಾಪವೆಂಬ ಉರುಲಿನಲ್ಲಿ ಬೀಳಿಸುತ್ತಾರೆ. ಅವರು ತಮ್ಮ
ಹೃದಯಗಳಿಗೆ ಸ್ವಾರ್ಥವನ್ನೇ ಕಲಿಸಿದ್ದಾರೆ. ಅವರು ಶಾಪಗ್ರಸ್ತ
ರಾಗಿದ್ದಾರೆ.

[15]ಈ ಸುಳ್ಳುಬೋಧಕರು ಸರಿಯಾದ ಮಾರ್ಗವನ್ನು
ತೊರೆದು, ಕೆಟ್ಟಮಾರ್ಗವನ್ನು ಅನುಸರಿಸಿದ್ದಾರೆ. ಬಿಳಾಮನು
ಬೆಯೋರನ ಮಗ. ಅವನು ಕೆಟ್ಟದ್ದರಿಂದ ದೊರೆ ಯುವ
ಲಾಭವನ್ನು ಪ್ರೀತಿಸಿದನು. [16]ಆದರೆ ಅವನು ಮಾಡುತ್ತಿರುವುದು
ತಪ್ಪೆಂದು ಒಂದು ಹೇಸರ ಕತ್ತೆಯು ಅವನಿಗೆ ತಿಳಿಸಿತು. ಅದು
ಒಂದು ಮೂಕ ಪ್ರಾಣಿ. ಆದರೆ ಅದು ಮಾನವನಂತೆ ಮಾತಾಡಿ
ಆ ಪ್ರವಾದಿಯ ಹುಚ್ಚುತನಕ್ಕೆ ಅಡ್ಡಿ ಮಾಡಿತು.

[17]ಈ ಸುಳ್ಳುಬೋಧಕರು ನೀರಿಲ್ಲದ ಒರತೆಗಳಂತಿದ್ದಾರೆ.
ಅವರು ಬಿರುಗಾಳಿಯಿಂದ ಬಡಿದುಕೊಂಡು ಹೋಗುವ
ಮೋಡಗಳಂತಿದ್ದಾರೆ. ಅವರಿಗಾಗಿ ಒಂದು ಕಗ್ಗತ್ತಲಾದ ಸ್ಥಳ
ವನ್ನು ಕಾದಿರಿಸಲಾಗಿದೆ. [18]ಅವರು ಅರ್ಥವಿಲ್ಲದ ಮಾತು
ಗಳಿಂದ ಬಡಾಯಿಕೊಚ್ಚಿಕೊಳ್ಳುತ್ತಾರೆ; ಜನರನ್ನು ಪಾಪಗಳ
ಬಲೆಗೆ ನಡೆಸುತ್ತಿದ್ದಾರೆ. ತಪ್ಪುಮಾರ್ಗದಲ್ಲಿ ನಡೆಯುವ ಜನರ
ಸಹವಾಸದಿಂದ ಹೊಸದಾಗಿ ತಪ್ಪಿಸಿಕೊಂಡು ಬಂದ ಜನರನ್ನು
ದಾರಿತಪ್ಪಿಸುತ್ತಾರೆ. ತಮ್ಮ ಪಾಪ ಸ್ವಭಾವಕ್ಕನುಸಾರವಾಗಿ
ಮಾಡಲು ಇಚ್ಛಿಸುವ ಕೆಟ್ಟಕಾರ್ಯಗಳನ್ನು ಬಳಸಿಕೊಂಡು ಈ
ಸುಳ್ಳುಬೋಧಕರು ಅವರನ್ನು ದಾರಿತಪ್ಪಿಸುತ್ತಾರೆ. [19]ಈ ಸುಳ್ಳು

ಬೋಧಕರು ಆ ಜನರಿಗೆ ಸ್ವಾತಂತ್ರ್ಯವನ್ನು ಕೊಡುವುದಾಗಿ
ವಾಗ್ದಾನ ಮಾಡುತ್ತಾರೆ. ಆದರೆ ಈ ಸುಳ್ಳುಬೋಧಕರೇ ಸ್ವತಂತ್ರ
ರಾಗದೆ ನಾಶವಾಗುವಂಥ ಸಂಗತಿಗಳಿಗೆ ಗುಲಾಮರಾಗಿದ್ದಾರೆ.
ಒಬ್ಬನು ಯಾವುದಕ್ಕೆ ಸೋತುಹೋಗಿದ್ದಾನೊ ಅದಕ್ಕೆ ಗುಲಾಮ
ನಾಗಿದ್ದಾನೆ. [20]ಈ ಲೋಕದಲ್ಲಿನ ಕೆಟ್ಟಕಾರ್ಯಗಳಿಂದ ಆ
ಜನರನ್ನು ಪಾರುಮಾಡಲಾಯಿತು. ನಮ್ಮ ಪ್ರಭುವಾದ ಮತ್ತು
ರಕ್ಷಕನಾದ ಯೇಸು ಕ್ರಿಸ್ತನನ್ನು ತಿಳಿದುಕೊಳ್ಳುವುದರ ಮೂಲಕ
ಅವರಿಗೆ ಬಿಡುಗಡೆಯಾಯಿತು. ಆದರೆ ಆ ಜನರು ತಮ್ಮ ಹಿಂದಿನ
ಸಂಗತಿಗಳ ಕಡೆಗೆ ಹಿಂದಿರುಗಿಹೋದರೆ ಮತ್ತು ಅವುಗಳು
ಅವರನ್ನು ತಮ್ಮ ಹತೋಟಿಯಲ್ಲಿಟ್ಟುಕೊಂಡಿದ್ದರೆ ಅವರು
ಮೊದಲಿಗಿಂತಲೂ ಹೆಚ್ಚು ಕೆಟ್ಟುಹೋಗುತ್ತಾರೆ. [21]ಹೌದು, ಆ
ಜನರು ಸರಿಯಾದ ಮಾರ್ಗವನ್ನು ತಿಳಿಯದೆ ಹೋಗಿದ್ದರೇ
ಒಳ್ಳೆಯದಾಗುತ್ತಿತ್ತು. ಸರಿಯಾದ ಮಾರ್ಗವನ್ನು ಅರಿತು
ಕೊಂಡು, ಪವಿತ್ರ ಬೋಧನೆಗಳಿಗೆ ವಿಮುಖರಾಗುವುದಕ್ಕಿಂತ
ಅದನ್ನು ತಿಳಿದುಕೊಳ್ಳದಿದ್ದರೇ ಚೆನ್ನಾಗಿರುತ್ತಿತ್ತು. [22]ನಿಜವಾಗಿ ಈ
ಗಾದೆಗಳಂತೆಯೇ ಅವರು ಮಾಡಿದರು: ‘‘ನಾಯಿಯು ತಾನು
ಕಕ್ಕಿದ್ದನ್ನೇ ತಿನ್ನಲು ತಿರುಗಿಕೊಂಡಿತು’’ * ಮತ್ತು ‘‘ತೊಳೆದ
ಹಂದಿಯು ಕೆಸರಿನಲ್ಲಿ ಹೊರಳಾಡಲು ಹೋಯಿತು.’’ *

## ಯೇಸು ಮತ್ತೆ ಪ್ರತ್ಯಕ್ಷನಾಗುತ್ತಾನೆ

3 ನನ್ನ ಸ್ನೇಹಿತರೇ, ನಾನು ನಿಮಗೆ ಬರೆಯುತ್ತಿರುವ ಎರಡನೆ
ಪತ್ರವಿದು. ನಿಮ್ಮ ಯಥಾರ್ಥವಾದ ಮನಸ್ಸು ಮತ್ತೆ ನೆನಪು
ಮಾಡಿಕೊಳ್ಳಲಿ ಎಂದು ನಾನು ಈ ಎರಡು ಪತ್ರಗಳನ್ನು ಬರೆ
ದಿದ್ದೇನೆ. [2]ಪರಿಶುದ್ಧರಾದ ಪ್ರವಾದಿಗಳು ಹಿಂದಿನಕಾಲದಲ್ಲಿ
ಹೇಳಿದ್ದನ್ನು ನೀವು ಜ್ಞಾಪಿಸಿಕೊಳ್ಳಬೇಕೆಂಬುದೇ ನನ್ನ ಅಪೇಕ್ಷೆ.
ನಮ್ಮ ರಕ್ಷಕನಾದ ಪ್ರಭು ನಿಮ್ಮ ಅಪೊಸ್ತಲರ ಮೂಲಕ ನೀಡಿದ
ಆಜ್ಞೆಯನ್ನು ನೆನಪು ಮಾಡಿಕೊಳ್ಳಿರಿ. [3]ಅಂತಿಮ ದಿನಗಳಲ್ಲಿ ಏನು
ಸಂಭವಿಸುತ್ತದೆ ಎಂಬುದನ್ನು ನೀವು ಅರ್ಥಮಾಡಿಕೊಳ್ಳುವುದು
ಬಹಳ ಮುಖ್ಯವಾಗಿದೆ. ಜನರು ನಿಮ್ಮನ್ನು ನೋಡಿ ಕುಚೋದ್ಯ
ಮಾಡುವರು. ಅವರು ತಮ್ಮ ಇಚ್ಛೆಗನುಸಾರವಾದ ಕೆಟ್ಟಕಾರ್ಯ
ಗಳನ್ನೇ ಮಾಡುತ್ತಾ ಜೀವಿಸುತ್ತಾರೆ. [4]ಆ ಜನರು, ‘‘ಆತನು ಮತ್ತೆ
ಬರುವುದಾಗಿ ವಾಗ್ದಾನ ಮಾಡಿದ್ದನು. ಆತನು ಎಲ್ಲಿದ್ದಾನೆ?
ನಮ್ಮ ಪಿತೃಗಳು ಸತ್ತುಹೋದರು. ಆದರೆ ಈ ಲೋಕವು ಆದಿ
ಯಿಂದಲೂ ಇದ್ದ ರೀತಿಯಲ್ಲಿಯೇ ಇದೆ’’ ಎಂದು ಹೇಳುವರು.
[5]ಆದರೆ ಬಹುಕಾಲದ ಹಿಂದೆ ಏನು ನಡೆಯಿತೆಂಬುದನ್ನು ನೆನಪು
ಮಾಡಿಕೊಳ್ಳಲು ಅವರಿಗೆ ಇಷ್ಟವಿಲ್ಲ. ಆದಿಯಲ್ಲಿ ದೇವರು
ಆಕಾಶವನ್ನು ಸೃಷ್ಟಿಸಿದನು. ದೇವರು ಲೋಕವನ್ನು ನೀರೊಳ
ಗಿಂದ ಮತ್ತು ನೀರಿನಿಂದ ಸೃಷ್ಟಿಸಿದನು. ದೇವರ ವಾಕ್ಯದಿಂದ
ಇವೆಲ್ಲಾ ಸಂಭವಿಸಿದವು. [6]ಬಳಿಕ ಆ ಲೋಕವು ಜಲಪ್ರಳಯ
ದಿಂದ ನಾಶವಾಯಿತು. [7]ಈಗಿರುವ ಆಕಾಶಕ್ಕೂ ಭೂಮಿಗೂ
ಅದೇ ದೇವರ ವಾಕ್ಯವು ಆಧಾರವಾಗಿದೆ. ಆಕಾಶ ಮತ್ತು ಭೂಮಿ
ಗಳು ಬೆಂಕಿಯಿಂದ ನಾಶಗೊಳ್ಳಲು ಇಡಲ್ಪಟ್ಟಿವೆ. ದೇವರಿಗೆ
ವಿರುದ್ಧವಾಗಿರುವ ಜನರೆಲ್ಲರಿಗೆ ಆಗುವ ನ್ಯಾಯತೀರ್ಪಿನ
ದಿನಕ್ಕಾಗಿಯೂ ನಾಶನಕ್ಕಾಗಿಯೂ ಭೂಮ್ಯಾಕಾಶಗಳು
ಇಡಲ್ಪಟ್ಟಿವೆ.

[8]ಆದರೆ ಪ್ರಿಯ ಸ್ನೇಹಿತರೇ, ಇದೊಂದನ್ನು ಮಾತ್ರ ಮರೆ
ಯದಿರಿ. ಪ್ರಭುವಿಗೆ ಒಂದು ದಿನವು ಸಾವಿರ ವರ್ಷಗಳಂತಿದೆ
ಮತ್ತು ಸಾವಿರ ವರ್ಷಗಳು ಒಂದು ದಿನದಂತಿದೆ. * [9]ಕೆಲವು
ಜನರು ತಿಳಿದು ಕೊಂಡಿರುವಂತೆ, ಪ್ರಭುವು ತಾನು ವಾಗ್ದಾನ
ಮಾಡಿದ್ದನ್ನು ತಡವಾಗಿ ನೆರವೇರಿಸುವುದಿಲ್ಲ. ದೇವರು ನಿಮ್ಮ
ವಿಷಯದಲ್ಲಿ ಇನ್ನೂ ತಾಳ್ಮೆಯಿಂದಿದ್ದಾನಷ್ಟೇ. ಯಾವ
ವ್ಯಕ್ತಿಯೂ ಕಳೆದುಹೋಗಬಾರದೆಂಬುದು ದೇವರ ಅಪೇಕ್ಷೆ
ಯಾಗಿದೆ. ಪ್ರತಿಯೊಬ್ಬರೂ ತಮ್ಮ ಹೃದಯಗಳನ್ನು ಪರಿವರ್ತಿಸಿ
ಕೊಂಡು, ಪಾಪಮಾಡುವುದನ್ನು ನಿಲ್ಲಿಸಬೇಕೆಂಬುದು ದೇವರ
ಅಪೇಕ್ಷೆ.

[10]ಆದರೆ ಪ್ರಭುವು ಮತ್ತೆ ಪ್ರತ್ಯಕ್ಷನಾಗುವ ದಿನವು ಕಳ್ಳನು
ಬರುವಂತೆ ಅನಿರೀಕ್ಷಿತವಾಗಿ ಬರುತ್ತದೆ. ಆಕಾಶವು
ಮಹಾಘೋಷದೊಂದಿಗೆ ಅದೃಶ್ಯವಾಗುತ್ತದೆ. ಆಕಾಶಮಂಡಲ
ದಲ್ಲಿರುವ ಎಲ್ಲಾ ಸೃಷ್ಟಿಗಳು ಬೆಂಕಿಯಿಂದ ನಾಶವಾಗುತ್ತವೆ. ಈ
ಲೋಕವೂ ಅದರಲ್ಲಿರುವ ಸಮಸ್ತವೂ ಸುಟ್ಟುಹೋಗುತ್ತದೆ.
[11]ನಾನು ನಿಮಗೆ ಹೇಳಿದಂತಹ ರೀತಿಯಲ್ಲಿಯೇ ಎಲ್ಲವೂ ನಾಶ
ಗೊಳ್ಳುತ್ತವೆ. ಆದುದರಿಂದ ನೀವು ಎಂತಹ ಜನರಾಗಿರಬೇಕು?
ನೀವು ಪರಿಶುದ್ಧರಾಗಿ ಬಾಳುವವರಾಗಿರಬೇಕು ಮತ್ತು ದೇವರ
ಸೇವೆಯ ಕಾರ್ಯಗಳನ್ನು ಮಾಡುವವರಾಗಿರಬೇಕು. [12]ನೀವು
ದೇವರ ದಿನವನ್ನು ಅಪೇಕ್ಷಿಸಿ ಬರಲಿರುವ ಆ ದಿನಕ್ಕಾಗಿ
ತವಕದಿಂದ ಎದುರು ನೋಡುವವರಾಗಿರಬೇಕು. ಆ ದಿನವು
ಬಂದಾಗ, ಆಕಾಶವು ಬೆಂಕಿಯಿಂದ ನಾಶವಾಗುತ್ತದೆ ಮತ್ತು
ಆಕಾಶದಲ್ಲಿರುವ ಪ್ರತಿಯೊಂದೂ ಬೆಂಕಿಯಿಂದ ಕರಗಿ
ಹೋಗುತ್ತದೆ. [13]ನಾವಾದರೊ ದೇವರು ವಾಗ್ದಾನ ಮಾಡಿರುವ
ನೂತನ ಆಕಾಶ ಮಂಡಲವನ್ನೂ ನೂತನ ಭೂಮಂಡಲವನ್ನೂ
ಎದುರು ನೋಡುತ್ತಿದ್ದೇವೆ. ನೀತಿಯು ಅವುಗಳಲ್ಲಿ ವಾಸ
ವಾಗಿರುವುದು.

[14]ಪ್ರಿಯ ಸ್ನೇಹಿತರೇ, ಇವುಗಳಿಗಾಗಿಯೇ ನಾವು ಎದುರು
ನೋಡುತ್ತಿದ್ದೇವೆ. ಆದುದರಿಂದ ನೀವು ಪಾಪವಿಲ್ಲದವ
ರಾಗಿರಲು ಮತ್ತು ತಪ್ಪಿಲ್ಲದವರಾಗಿರಲು ನಿಮ್ಮಿಂದ ಸಾಧ್ಯ
ವಾದಷ್ಟು ಪ್ರಯತ್ನಿಸಿರಿ. ದೇವರೊಂದಿಗೆ ಸಮಾಧಾನದಿಂದಿರಲು
ಪ್ರಯತ್ನಿಸಿರಿ. [15]ನಾವು ರಕ್ಷಣೆ ಹೊಂದಿಕೊಂಡದ್ದು ನಮ್ಮ ಪ್ರಭು
ವಿನ ತಾಳ್ಮೆಯಿಂದಲೇ ಎಂಬುದನ್ನು ನೆನಪುಮಾಡಿಕೊಳ್ಳಿರಿ.
ನಮ್ಮ ಪ್ರಿಯ ಸಹೋದರನಾದ ಪೌಲನು ದೇವರಿಂದ ತನಗೆ
ದೊರೆತ ಜ್ಞಾನದಿಂದ ನಿಮಗೆ ಪತ್ರ ಬರೆದಾಗ ಇದನ್ನೇ ತಿಳಿಸಿ
ದನು.

[16]ಪೌಲನು ತನ್ನ ಎಲ್ಲ ಪತ್ರಗಳಲ್ಲಿಯೂ ಇವುಗಳನ್ನು ಕುರಿತು
ಇದೇ ರೀತಿ ಬರೆಯುತ್ತಾನೆ. ಕೆಲವು ಸಂದರ್ಭಗಳಲ್ಲಿ ಪೌಲನ
ಪತ್ರಗಳಲ್ಲಿರುವವುಗಳನ್ನು ಅರ್ಥಮಾಡಿಕೊಳ್ಳುವುದು ಕಷ್ಟ
ವಾಗುತ್ತದೆ. ಕೆಲವರು ಅವುಗಳನ್ನು ಬೇಕೆಂದೇ ತಪ್ಪಾಗಿ
ಅರ್ಥೈಸುತ್ತಾರೆ. ಅವರು ಮೂಢರಾಗಿದ್ದಾರೆ ಮತ್ತು ನಂಬಿಕೆ
ಯಲ್ಲಿ ಬಲಹೀನರಾಗಿದ್ದಾರೆ. ಅವರು ಪವಿತ್ರ ಗ್ರಂಥದ ಇತರ
ಭಾಗಗಳನ್ನೂ ತಪ್ಪಾಗಿ ವಿವರಿಸುತ್ತಾರೆ. ಅವರು ಹೀಗೆ ತಮ್ಮನ್ನು
ತಾವೇ ನಾಶಪಡಿಸಿಕೊಳ್ಳುತ್ತಾರೆ.

[17]ಪ್ರಿಯ ಸ್ನೇಹಿತರೇ, ನೀವು ಈಗಾಗಲೇ ಇದರ ಬಗ್ಗೆ
ತಿಳಿದಿರುವಿರಿ. ಆದ್ದರಿಂದ ನೀವು ಎಚ್ಚರದಿಂದಿರಿ. ಆ ಕೆಟ್ಟ ಜನರು

---

**ನಾಯಿಯು ... ತಿರುಗಿಕೊಂಡಿತು** ಜ್ಞಾನೋಕ್ತಿ 26:11.

**ತೊಳೆದ ... ಹೋಯಿತು** ಜ್ಞಾನೋಕ್ತಿ 26:11.

**ವಚನ 8** ಕೀರ್ತನೆ 90:4.

ತಾವು ಮಾಡುವ ಕೆಟ್ಟಕಾರ್ಯಗಳಿಂದ ನಿಮ್ಮನ್ನು ದಾರಿತಪ್ಪಿಸ
ದಂತೆ ನೋಡಿಕೊಳ್ಳಿರಿ. ನಿಮ್ಮ ಬಲವಾದ ನಂಬಿಕೆಯನ್ನು
ತೊರೆದುಬಿಡದಂತೆ ಎಚ್ಚರಿಕೆಯಾಗಿರಿ. 18 ನಿಮ್ಮ ಪ್ರಭುವಾದ
ಮತ್ತು ರಕ್ಷಕನಾದ ಯೇಸು ಕ್ರಿಸ್ತನ ಕೃಪೆಯಲ್ಲಿಯೂ ತಿಳುವಳಿಕೆ
ಯಲ್ಲಿಯೂ ಬೆಳೆಯುತ್ತಲೇ ಇರಿ. ಆತನಿಗೆ ಈಗಲೂ
ಎಂದೆಂದಿಗೂ ಮಹಿಮೆಯಾಗಲಿ! ಆಮೆನ್.

# ಯೋಹಾನನು ಬರೆದ ಮೊದಲನೆ ಪತ್ರ

1 ಈ ಲೋಕವು ಆರಂಭವಾಗುವುದಕ್ಕಿಂತ ಮುಂಚಿನಿಂದಲೂ
ಇದ್ದ ಜೀವವಾಕ್ಯದ ಕುರಿತಾಗಿ ನಾವು ನಿಮಗೆ ಬರೆಯು
ತ್ತಿದ್ದೇವೆ:

> ಅದನ್ನು ಕಿವಿಯಾರೆ ಕೇಳಿದೆವು, ಕಣ್ಣಾರೆ ನೋಡಿ
> ದೆವು, ಮನಸ್ಸಿಟ್ಟು ಗಮನಿಸಿದೆವು, ಕೈಗಳಿಂದ ಮುಟ್ಟಿ
> ನೋಡಿದೆವು.

2ಆ ಜೀವವು ನಮಗೆ ಪ್ರತ್ಯಕ್ಷವಾಯಿತು. ನಾವು ಅದನ್ನು
ನೋಡಿದ್ದರಿಂದ ಅದರ ಬಗ್ಗೆ ಸಾಕ್ಷಿ ಹೇಳಬಲ್ಲೆವು. ನಾವೀಗ
ನಿಮಗೆ ಆ ಜೀವದ ಬಗ್ಗೆ ಸಾಕ್ಷಿ ಹೇಳುತ್ತೇವೆ. ಅದು ನಿತ್ಯವಾದ
ಜೀವ. ಈ ಜೀವವು ತಂದೆಯಾದ ದೇವರ ಸಂಗಡವಿತ್ತು.
ದೇವರು ಈ ಜೀವವನ್ನು ನಮಗೆ ತೋರಿಸಿದನು. 3ನಾವು ನೋಡಿ
ದವುಗಳನ್ನೂ ಕೇಳಿದವುಗಳನ್ನೂ ನಾವೀಗ ನಿಮಗೆ ಹೇಳುತ್ತೇವೆ.
ಏಕೆಂದರೆ ನೀವು ನಮ್ಮ ಅನ್ಯೋನ್ಯತೆಯಲ್ಲಿ ಪಾಲುಗಾರರಾಗ
ಬೇಕೆಂಬುದು ನಮ್ಮ ಅಪೇಕ್ಷೆ. ನಮ್ಮ ಈ ಅನ್ಯೋನ್ಯತೆಯು
ತಂದೆಯಾದ ದೇವರ ಮತ್ತು ಆತನ ಮಗನಾದ ಯೇಸು ಕ್ರಿಸ್ತನ
ಸಂಗಡವಿರುವಂಥದ್ದು. 4ನಮ್ಮ* ಸಂತೋಷವು ಪರಿಪೂರ್ಣ
ವಾಗಲೆಂದು ನಾವು ನಿಮಗೆ ಈ ಸಂಗತಿಗಳನ್ನು ಬರೆಯು
ತ್ತಿದ್ದೇವೆ.

### ದೇವರು ನಮ್ಮ ಪಾಪಗಳನ್ನು ಕ್ಷಮಿಸುತ್ತಾನೆ

5ನಾವು ದೇವರಿಂದ ಕೇಳಿ ನಿಮಗೆ ತಿಳಿಸುವ ವಾರ್ತೆ ಏನಂದರೆ,
ದೇವರು ಬೆಳಕಾಗಿದ್ದಾನೆ; ಆತನಲ್ಲಿ ಅಂಧಕಾರವಿಲ್ಲ. 6ಆದ್ದ
ರಿಂದ ದೇವರ ಜೊತೆಯಲ್ಲಿ ಅನ್ಯೋನ್ಯತೆಯಿಂದ ಇದ್ದೇವೆ
ಎಂದು ನಾವು ಹೇಳಿಕೊಂಡು, ಅಂಧಕಾರದಲ್ಲಿ ಜೀವಿಸುತ್ತಿದ್ದರೆ
ಸುಳ್ಳು ಹೇಳಿದಂತಾಯಿತು. ಏಕೆಂದರೆ ನಾವು ಸತ್ಯವನ್ನು ಅನುಸರಿ
ಸುತ್ತಿಲ್ಲ. 7ದೇವರು ಬೆಳಕಿನಲ್ಲಿದ್ದಾನೆ. ಆದ್ದರಿಂದ ನಾವೂ ಬೆಳಕಿ
ನಲ್ಲಿ ಜೀವಿಸಬೇಕಾಗಿದೆ. ನಾವು ಬೆಳಕಿನಲ್ಲಿ ಜೀವಿಸುವವ
ರಾಗಿದ್ದರೆ ಪರಸ್ಪರ ಅನ್ಯೋನ್ಯತೆಯಲ್ಲಿದ್ದೇವೆ ಮತ್ತು ದೇವರ
ಮಗನಾದ ಯೇಸುವಿನ ರಕ್ತವು ನಮ್ಮ ಪಾಪಗಳನ್ನೆಲ್ಲಾ ನಿವಾರಣೆ
ಮಾಡುತ್ತದೆ.
8ನಮ್ಮಲ್ಲಿ ಪಾಪವಿಲ್ಲವೆಂದು ಹೇಳಿಕೊಂಡರೆ, ನಮ್ಮನ್ನು
ನಾವೇ ಮೋಸಪಡಿಸಿಕೊಳ್ಳುವವರಾಗಿದ್ದೇವೆ ಮತ್ತು ನಮ್ಮಲ್ಲಿ
ಸತ್ಯವೇ ಇಲ್ಲ. 9ಆದರೆ ನಮ್ಮ ಪಾಪಗಳನ್ನು ಅರಿಕೆ ಮಾಡಿ
ಕೊಂಡರೆ, ಆತನು ನಂಬಿಗಸ್ತನೂ ನೀತಿವಂತನೂ ಆಗಿರುವುದ
ರಿಂದ ನಮ್ಮ ಪಾಪಗಳನ್ನು ಕ್ಷಮಿಸಿ ನಮ್ಮನ್ನು ಶುದ್ಧೀಕರಿಸುತ್ತಾನೆ.
10ನಾವು ಪಾಪಮಾಡಿಲ್ಲವೆಂದು ಹೇಳಿಕೊಂಡರೆ, ದೇವರನ್ನೇ
ಸುಳ್ಳುಗಾರನನ್ನಾಗಿ ಮಾಡುವವರಾಗಿದ್ದೇವೆ ಮತ್ತು ದೇವರ
ವಾಕ್ಯವನ್ನು ಒಪ್ಪಿಕೊಳ್ಳದವರಾಗಿದ್ದೇವೆ.

### ಯೇಸು ನಮ್ಮ ಸಹಾಯಕ

2 ನನ್ನ ಪ್ರಿಯ ಮಕ್ಕಳೇ, ನೀವು ಪಾಪಗಳನ್ನು ಮಾಡದಿರ
ಲೆಂದು ನಾನು ನಿಮಗೆ ಈ ಪತ್ರವನ್ನು ಬರೆಯುತ್ತಿದ್ದೇನೆ.
ಆದರೆ ಯಾರಾದರೂ ಪಾಪವನ್ನು ಮಾಡಿದರೆ ನಮಗೆ ಸಹಾಯ
ಮಾಡಲು ಯೇಸು ಕ್ರಿಸ್ತನಿದ್ದಾನೆ. ನೀತಿವಂತನಾಗಿರುವ ಆತನು
ತಂದೆಯಾದ ದೇವರ ಬಳಿಯಲ್ಲಿದ್ದಾನೆ. 2ನಮ್ಮ ಪಾಪಗಳ ನಿವಾ
ರಣೆಗೂ ಎಲ್ಲಾ ಜನರ ಪಾಪಗಳ ನಿವಾರಣೆಗೂ ಯೇಸುವೇ
ಮಾರ್ಗವಾಗಿದ್ದಾನೆ.
3ದೇವರ ಆಜ್ಞೆಗಳಿಗೆ ನಾವು ವಿಧೇಯರಾಗಿದ್ದರೆ, ದೇವರ ಬಗ್ಗೆ
ನಿಜವಾಗಿಯೂ ತಿಳಿದಿದ್ದೇವೆಂಬುದು ಖಚಿತವಾಗುತ್ತದೆ.
4‘‘ದೇವರನ್ನು ನಾನು ಬಲ್ಲೆನು’’ ಎಂದು ಹೇಳುವವನು ದೇವರ
ಆಜ್ಞೆಗಳಿಗೆ ವಿಧೇಯನಾಗಿರದಿದ್ದರೆ, ಅವನು ಸುಳ್ಳುಗಾರ
ನಾಗಿದ್ದಾನೆ. ಅವನಲ್ಲಿ ಸತ್ಯವಿಲ್ಲ. 5ಆದರೆ ಯಾವನಾದರೂ
ದೇವರ ವಾಕ್ಯಕ್ಕೆ ವಿಧೇಯನಾಗಿದ್ದರೆ, ದೇವರ ಮೇಲೆ ಅವನಿ
ಗಿರುವ ಪ್ರೀತಿಯು ಪರಿಪೂರ್ಣವಾಗಿದೆ. ನಾವು ದೇವರನ್ನು
ಅನುಸರಿಸುತ್ತಿದ್ದೇವೆ ಎಂಬುದನ್ನು ಇದರಿಂದಲೇ ತಿಳಿದುಕೊಳ್ಳು
ತ್ತೇವೆ. 6ದೇವರಲ್ಲಿ ನೆಲೆಗೊಂಡಿದ್ದೇನೆ ಎಂದು ಹೇಳುವವನು,
ಯೇಸು ಜೀವಿಸಿದಂತೆಯೇ ಜೀವಿಸಬೇಕು.

### ಇತರರನ್ನು ಪ್ರೀತಿಸಿ

7ನನ್ನ ಪ್ರಿಯ ಸ್ನೇಹಿತರೇ, ನಾನು ನಿಮಗೆ ಹೊಸ ಆಜ್ಞೆಯನ್ನು
ಬರೆಯುತ್ತಿಲ್ಲ. ಮೊದಲಿಂದಲೂ ಈ ಆಜ್ಞೆಯು ನಿಮಗಿತ್ತು.
ನೀವು ಈಗಾಗಲೇ ಕೇಳಿರುವ ವಾಕ್ಯವೇ ಈ ಆಜ್ಞೆಯಾಗಿದೆ.
8ಆದರೆ ಈ ಆಜ್ಞೆಯನ್ನು ನಾನು ನಿಮಗೆ ಹೊಸ ಆಜ್ಞೆಯೋ
ಎಂಬಂತೆ ಬರೆಯುತ್ತಿದ್ದೇನೆ. ಈ ಆಜ್ಞೆಯು ಸತ್ಯವಾದದ್ದು.
ಅದರ ಸತ್ಯತೆಯನ್ನು ನೀವು ಯೇಸುವಿನಲ್ಲಿಯೂ ನಿಮ್ಮಲ್ಲಿಯೂ
ಕಾಣಬಹುದು. ಕತ್ತಲೆಯು ಕಳೆದುಹೋಗುತ್ತಿದೆ ಮತ್ತು ನಿಜ
ವಾದ ಬೆಳಕು ಈಗಾಗಲೇ ಪ್ರಕಾಶಿಸುತ್ತಿದೆ.
9‘‘ನಾನು ಬೆಳಕಿನಲ್ಲಿದ್ದೇನೆ’’ ಎಂದು ಹೇಳುವವನು ತನ್ನ
ಸಹೋದರನನ್ನು ದ್ವೇಷಿಸುತ್ತಿದ್ದರೆ, ಅವನಿನ್ನೂ ಅಂಧಕಾರ
ದಲ್ಲಿದ್ದಾನೆ. 10ತನ್ನ ಸಹೋದರನನ್ನು ಪ್ರೀತಿಸುವವನು ಬೆಳಕಿ
ನಲ್ಲಿದ್ದಾನೆ. ಬೇರೊಬ್ಬನನ್ನು ಪಾಪಕ್ಕೆ ನಡೆಸುವಂಥದ್ದೇನೂ
ಅವನಲ್ಲಿರುವುದಿಲ್ಲ. 11ಆದರೆ ತನ್ನ ಸಹೋದರನನ್ನು ದ್ವೇಷಿಸು

---

**ನಮ್ಮ** ಕೆಲವು ಗ್ರೀಕ್ ಪ್ರತಿಕೆಗಳಲ್ಲಿ ನಿಮ್ಮ ಅಥವಾ ನೀವು ಎಂದು ಹೇಳಿದೆ.

ವವನು ಅಂಧಕಾರದಲ್ಲಿದ್ದಾನೆ. ಅವನು ಅಂಧಕಾರದಲ್ಲಿಯೇ
ಜೀವಿಸುತ್ತಾನೆ. ಅವನಿಗೆ ತಾನು ಎಲ್ಲಿಗೆ ಹೋಗುತ್ತಿದ್ದೇನೆ
ಎಂಬುದೇ ತಿಳಿದಿಲ್ಲ. ಏಕೆಂದರೆ ಅಂಧಕಾರವು ಅವನನ್ನು
ಕುರುಡನನ್ನಾಗಿ ಮಾಡಿದೆ.

12 ಪ್ರಿಯ ಮಕ್ಕಳೇ, ನಿಮ್ಮ ಪಾಪಗಳು ಕ್ರಿಸ್ತನ
ಮೂಲಕ ಕ್ಷಮಿಸಲ್ಪಟ್ಟಿರುವುದರಿಂದ ನಾನು
ನಿಮಗೆ ಬರೆಯುತ್ತಿದ್ದೇನೆ.
13 ತಂದೆಗಳೇ, ಆದಿಯಿಂದ ಇರುವಾತನನ್ನು ನೀವು
ತಿಳಿದಿರುವುದರಿಂದ ನಾನು ನಿಮಗೆ ಬರೆಯು
ತ್ತಿದ್ದೇನೆ. ಯುವಕರೇ, ನೀವು ಕೆಡುಕನನ್ನು
ಸೋಲಿಸಿರುವುದರಿಂದ ನಾನು ನಿಮಗೆ ಬರೆಯು
ತ್ತಿದ್ದೇನೆ.
14 ಮಕ್ಕಳೇ, ನೀವು ತಂದೆಯನ್ನು ತಿಳಿದಿರುವು
ದರಿಂದ ನಾನು ನಿಮಗೆ ಬರೆಯುತ್ತಿದ್ದೇನೆ. ತಂದೆ
ಗಳೇ, ಆದಿಯಿಂದ ಇರುವಾತನನ್ನು ನೀವು
ತಿಳಿದಿರುವುದರಿಂದ ನಾನು ನಿಮಗೆ ಬರೆಯು
ತ್ತಿದ್ದೇನೆ. ಯುವಕರೇ, ನೀವು ಬಲಶಾಲಿಗಳಾ
ಗಿರುವುದರಿಂದ ದೇವರ ವಾಕ್ಯವು ನಿಮ್ಮಲ್ಲಿ
ನೆಲಸಿರುವುದರಿಂದ ಮತ್ತು ನೀವು ಕೆಡುಕನನ್ನು
ಸೋಲಿಸಿರುವುದರಿಂದ ನಾನು ನಿಮಗೆ ಬರೆಯು
ತ್ತಿದ್ದೇನೆ.

15ಈ ಲೋಕವನ್ನಾಗಲಿ ಈ ಲೋಕದಲ್ಲಿರುವ ವಸ್ತುಗಳ
ನ್ನಾಗಲಿ ನೀವು ಪ್ರೀತಿಸಬೇಡಿ. ಈ ಲೋಕವನ್ನು ಪ್ರೀತಿಸು
ವವನಿಗೆ ತಂದೆಯ (ದೇವರು) ಮೇಲೆ ಪ್ರೀತಿಯಿರುವುದಿಲ್ಲ.
16ಈ ಲೋಕದಲ್ಲಿರುವ ಕೆಟ್ಟವುಗಳು ಇಂತಿವೆ:

ನಮ್ಮ ಪಾಪಸ್ವಭಾವವನ್ನು ತಣಿಸಲು ಮಾಡ
ಲಿಚ್ಛಿಸುವ ಕಾರ್ಯಗಳು. ನಾವು ನೋಡುವ ಪಾಪ
ಪೂರಿತವಾದದ್ದನ್ನು ಪಡೆಯಲಿಚ್ಛಿಸುವದು. ನಮ್ಮ
ಲ್ಲಿರುವ ವಸ್ತುಗಳಲ್ಲಿಯೇ ದುರಹಂಕಾರ
ಪಡುವುದು.

ಆದರೆ ಇವುಗಳಲ್ಲಿ ಯಾವುದೂ ತಂದೆಯಿಂದ ಬರುವುದಿಲ್ಲ.
ಇವುಗಳೆಲ್ಲ ಈ ಲೋಕದಿಂದ ಬರುತ್ತವೆ. 17ಈ ಲೋಕವು
ಗತಿಸಿಹೋಗುತ್ತಿದೆ. ಈ ಲೋಕದಲ್ಲಿ ಜನರು ಬಯಸುವಂಥ
ವುಗಳೆಲ್ಲ ಗತಿಸಿಹೋಗುತ್ತವೆ. ಆದರೆ ದೇವರ ಚಿತ್ತಕ್ಕನು
ಸಾರವಾಗಿ ಮಾಡುವವನು ಸದಾಕಾಲ ಜೀವಿಸುವನು.

### ಕ್ರಿಸ್ತನ ಶತ್ರುಗಳನ್ನು ಅನುಸರಿಸಬೇಡಿ

18ನನ್ನ ಪ್ರಿಯ ಮಕ್ಕಳೇ, ಅಂತ್ಯವು ಸಮೀಪಿಸಿದೆ! ಕ್ರಿಸ್ತನ ಶತ್ರು
ಬರುತ್ತಿದ್ದಾನೆಂಬುದನ್ನು ನೀವು ಕೇಳಿದ್ದೀರಿ. ಕ್ರಿಸ್ತನ ಅನೇಕ
ಶತ್ರುಗಳು ಈಗಾಗಲೇ ಇಲ್ಲಿದ್ದಾರೆ. ಆದ್ದರಿಂದ ಅಂತ್ಯವು
ಸಮೀಪಿಸಿದೆ ಎಂಬುದು ನಮಗೆ ತಿಳಿದಿದೆ. 19ಕ್ರಿಸ್ತನ ಶತ್ರುಗಳು
ನಮ್ಮ ಗುಂಪಿನಲ್ಲೇ ಇದ್ದರು. ಅವರು ನಮ್ಮನ್ನು ಬಿಟ್ಟು
ಹೋದರು. ಅವರು ನಿಜವಾಗಿಯೂ ನಮ್ಮವರಾಗಿರಲಿಲ್ಲ.
ಅವರು ನಿಜವಾಗಿಯೂ ನಮ್ಮ ಸಭೆಗೆ ಸೇರಿದವರಾಗಿದ್ದರೆ
ನಮ್ಮೊಂದಿಗೆ ಇರುತ್ತಿದ್ದರು. ಆದರೆ ಅವರು ಹೊರಟು
ಹೋದರು. ಅವರು ನಿಜವಾಗಿಯೂ ನಮ್ಮವರಾಗಿರಲಿಲ್ಲ
ಎಂಬುದನ್ನು ಇದೇ ತೋರ್ಪಡಿಸುತ್ತದೆ.
20ಪರಿಶುದ್ಧವಾಗಿರುವಾತನು (ದೇವರು ಅಥವಾ ಕ್ರಿಸ್ತನು)
ಕೊಟ್ಟಿರುವ ವರವನ್ನು ನೀವು ಹೊಂದಿದ್ದೀರಿ. ಆದುದರಿಂದ
ನೀವೆಲ್ಲರೂ ಸತ್ಯವನ್ನು ತಿಳಿದಿದ್ದೀರಿ. 21ನಾನು ನಿಮಗೆ ಏಕೆ
ಬರೆಯಬೇಕು? ನೀವು ಸತ್ಯವನ್ನು ತಿಳಿದಿಲ್ಲವೆಂದು ನಾನು
ಬರೆಯಬೇಕೇ? ಇಲ್ಲ! ನೀವು ಸತ್ಯವನ್ನು ತಿಳಿದಿರುವದರಿಂದ
ನಾನು ಈ ಪತ್ರವನ್ನು ಬರೆಯುತ್ತಿದ್ದೇನೆ. ಸತ್ಯದಿಂದ ಯಾವ
ಸುಳ್ಳೂ ಬರುವುದಿಲ್ಲ ಎಂಬುದು ನಿಮಗೆ ತಿಳಿದಿದೆ.
22ಆದುದರಿಂದ ಸುಳ್ಳು ಹೇಳುವವನು ಯಾರು? ಯೇಸು
ವನ್ನು ಕ್ರಿಸ್ತನಲ್ಲವೆಂದು ಹೇಳುವವನೇ ಸುಳ್ಳುಗಾರ. ಅವನು
ಕ್ರಿಸ್ತನ ವೈರಿಯಾಗಿದ್ದಾನೆ. ಅವನು ತಂದೆಯನ್ನಾಗಲಿ
(ದೇವರು), ಆತನ ಮಗನನ್ನಾಗಲಿ (ಕ್ರಿಸ್ತನು) ನಂಬುವುದಿಲ್ಲ.
23ಮಗನನ್ನು ನಂಬದೆ ಇರುವವನು ತಂದೆಯನ್ನು ಹೊಂದಿಲ್ಲ.
ಆದರೆ ಮಗನನ್ನು ಸ್ವೀಕರಿಸಿಕೊಳ್ಳುವವನು ತಂದೆಯನ್ನು ಸಹ
ಹೊಂದಿದ್ದಾನೆ.
24ನೀವು ಆರಂಭದಿಂದಲೂ ಕೇಳಿರುವ ಬೋಧನೆಯನ್ನೇ
ಅನುಸರಿಸಿರಿ. ಆ ಬೋಧನೆಯನ್ನು ಅನುಸರಿಸುವವರಾಗಿದ್ದರೆ
ನೀವು ಮಗನಲ್ಲಿಯೂ ತಂದೆಯಲ್ಲಿಯೂ ನೆಲೆಗೊಂಡಿದ್ದೀರಿ.
25ಕ್ರಿಸ್ತನು ನಮಗೆ ಕೊಡುವುದಾಗಿ ಮಾಡಿದ್ದ ವಾಗ್ದಾನವೇ ಈ
ನಿತ್ಯಜೀವ.
26ನಿಮ್ಮನ್ನು ತಪ್ಪುಮಾರ್ಗಕ್ಕೆ ಸೆಳೆಯುವ ಜನರನ್ನು ಕುರಿತು
ನಾನು ನಿಮಗೆ ಈ ಪತ್ರವನ್ನು ಬರೆಯುತ್ತಿದ್ದೇನೆ. 27ಕ್ರಿಸ್ತನು
ನಿಮಗೆ ವಿಶೇಷವಾದ ವರವನ್ನು ದಯಪಾಲಿಸಿರುವನು. ಅದು
ನಿಮ್ಮಲ್ಲಿ ಇನ್ನೂ ಇದೆ. ಆದುದರಿಂದ ನಿಮಗೆ ಯಾವ ಉಪ
ದೇಶಕರ ಅಗತ್ಯವೂ ಇಲ್ಲ. ಆತನು ನಿಮಗೆ ಕೊಟ್ಟಿರುವ ವರವು
ನಿಮಗೆ ಎಲ್ಲವನ್ನೂ ಉಪದೇಶಿಸುತ್ತದೆ. ಅದು ನಿಜವಾದುದು,
ಸುಳ್ಳಲ್ಲ. ಆದ್ದರಿಂದ ಅದರ ಉಪದೇಶಕ್ಕನುಸಾರವಾಗಿ ನೀವು
ಆತನಲ್ಲಿ ನೆಲೆಗೊಂಡಿರಿ.
28ಹೌದು, ನನ್ನ ಪ್ರಿಯ ಮಕ್ಕಳೇ, ಆತನಲ್ಲಿಯೇ ನೆಲೆಗೊಂಡಿ
ರೋಣ. ನಾವು ಹೀಗೆ ಮಾಡಿದರೆ, ಕ್ರಿಸ್ತನು ಮರಳಿ ಬರುವ
ದಿನದಂದು ನಾವು ಭಯಪಡಬೇಕಾಗಿಲ್ಲ; ಅಡಗಿಕೊಳ್ಳುವ
ಅಗತ್ಯವಿರುವುದಿಲ್ಲ; ನಾಚಿಕೆಪಡುವ ಅಗತ್ಯವೂ ಇರುವುದಿಲ್ಲ.
29ಕ್ರಿಸ್ತನು ನೀತಿವಂತನೆಂಬುದು ನಿಮಗೆ ತಿಳಿದಿದೆ. ಆದುದರಿಂದ
ಯೋಗ್ಯವಾದುದನ್ನು ಮಾಡುವ ಜನರೆಲ್ಲರೂ ದೇವರ
ಮಕ್ಕಳೆಂಬುದು ನಿಮಗೆ ತಿಳಿದಿದೆ.

### ನಾವು ದೇವರ ಮಕ್ಕಳಾಗಿದ್ದೇವೆ

3 ತಂದೆಯು ನಮ್ಮನ್ನು ಬಹಳವಾಗಿ ಪ್ರೀತಿಸಿದನು! ದೇವರ
ಮಕ್ಕಳು ಎಂಬ ಹೆಸರನ್ನು ನಮಗೆ ಕೊಡುವಷ್ಟರ ಮಟ್ಟಿಗೆ
ದೇವರು ನಮ್ಮನ್ನು ಪ್ರೀತಿಸಿದನು. ನಾವು ನಿಜವಾಗಿಯೂ
ದೇವರ ಮಕ್ಕಳಾಗಿದ್ದೇವೆ. ಆದರೆ ಲೋಕದಲ್ಲಿರುವ ಜನ
ರಾದರೋ ನಾವು ದೇವರ ಮಕ್ಕಳೆಂಬುದನ್ನು ಅರ್ಥಮಾಡಿ
ಕೊಳ್ಳುವುದಿಲ್ಲ. ಏಕೆಂದರೆ ಅವರು ದೇವರನ್ನು ತಿಳಿದಿಲ್ಲ.
2ಪ್ರಿಯ ಸ್ನೇಹಿತರೇ, ಈಗ ನಾವು ದೇವರ ಮಕ್ಕಳಾಗಿದ್ದೇವೆ.

ನಾವು ಮುಂದೆ ಏನಾಗುವವೆಂಬುದನ್ನು ನಮಗಿನ್ನೂ ತೋರ್ಪ
ಡಿಸಿಲ್ಲ. ಆದರೆ ಕ್ರಿಸ್ತನು ಮರಳಿ ಬಂದಾಗ ಅದನ್ನು ತಿಳಿದು
ಕೊಳ್ಳುತ್ತೇವೆ. ನಾವು ಆತನಂತಾಗುವೆವು. ನಾವು ಆತನ ನಿಜ
ಸ್ವರೂಪವನ್ನೇ ನೋಡುವೆವು. 3ಕ್ರಿಸ್ತನಲ್ಲಿ ಈ ನಿರೀಕ್ಷೆಯನ್ನು
ಹೊಂದಿರುವ ಪ್ರತಿಯೊಬ್ಬನೂ ಕ್ರಿಸ್ತನು ಶುದ್ಧನಾಗಿರುವಂತೆ
ತನ್ನನ್ನು ಶುದ್ಧ ಮಾಡಿಕೊಳ್ಳುತ್ತಾನೆ.

4ಪಾಪ ಮಾಡುವವನು ದೇವರ ಕಟ್ಟಳೆಗಳನ್ನು ಉಲ್ಲಂಘಿಸು
ವವನಾಗಿದ್ದಾನೆ. ಹೌದು, ಪಾಪ ಮಾಡುವುದಕ್ಕೂ ದೇವರ
ಕಟ್ಟಳೆಗಳಿಗೆ ವಿರುದ್ಧವಾಗಿ ಜೀವಿಸುವುದಕ್ಕೂ ಯಾವ ವ್ಯತ್ಯಾಸ
ವಿಲ್ಲ. 5ಕ್ರಿಸ್ತನು ಜನರ ಪಾಪಗಳನ್ನು ಹೋಗಲಾಡಿಸಲು ಬಂದ
ನೆಂಬುದು ನಿಮಗೆ ತಿಳಿದಿದೆ. ಆತನಲ್ಲಿ ಪಾಪವೆಂಬುದಿಲ್ಲ.
6ಆದ್ದರಿಂದ ಕ್ರಿಸ್ತನಲ್ಲಿ ನೆಲಸಿರುವ ವ್ಯಕ್ತಿಯು ಪಾಪದಲ್ಲೇ
ಮುಂದುವರಿಯುವುದಿಲ್ಲ. ಪಾಪವನ್ನು ಮಾಡುತ್ತಲೇ ಇರು
ವವನು ಆತನನ್ನು ಎಂದೂ ಅರ್ಥಮಾಡಿಕೊಂಡವನಲ್ಲ ಮತ್ತು
ಎಂದೂ ತಿಳಿದವನಲ್ಲ.

7ಪ್ರಿಯ ಮಕ್ಕಳೇ, ನಿಮ್ಮನ್ನು ಯಾರೂ ತಪ್ಪು ಮಾರ್ಗಕ್ಕೆ
ಎಳೆಯದಂತೆ ನೋಡಿಕೊಳ್ಳಿರಿ. ಕ್ರಿಸ್ತನು ನೀತಿವಂತನಾಗಿದ್ದಾನೆ.
ಆತನಂತೆ ನೀತಿವಂತನಾಗಿರಲು ಬಯಸುವವನು ಒಳ್ಳೆಯದನ್ನು
ಮಾಡಬೇಕು. 8ಸೈತಾನನು ಆರಂಭದಿಂದಲೂ ಪಾಪಗಳನ್ನು
ಮಾಡುತ್ತಿದ್ದಾನೆ. ಪಾಪಗಳನ್ನು ಮಾಡುತ್ತಲೇ ಇರುವವನು
ಸೈತಾನನಿಗೆ ಸೇರಿದವನಾಗಿದ್ದಾನೆ. ದೇವರ ಮಗನಾದ ಕ್ರಿಸ್ತನು
ಸೈತಾನನ ಕಾರ್ಯವನ್ನು ನಾಶಪಡಿಸುವುದಕ್ಕಾಗಿಯೇ ಬಂದನು.
9ದೇವರಿಂದ ಹೊಸದಾಗಿ ಹುಟ್ಟಿದವನು ಪಾಪಗಳಲ್ಲಿ ನೆಲೆ
ಗೊಂಡಿರುವುದಿಲ್ಲ. ಏಕೆಂದರೆ ದೇವರು ದಯಪಾಲಿಸಿದ ಹೊಸ
ಜೀವವು ಅವನಲ್ಲಿ ನೆಲೆಸಿರುತ್ತದೆ. ಅವನು ದೇವರಿಂದ
ಹೊಸದಾಗಿ ಹುಟ್ಟಿದ ಕಾರಣ ಪಾಪದಲ್ಲೇ ಮುಂದುವರಿಯಲು
ಅವನಿಗೆ ಸಾಧ್ಯವಿಲ್ಲ. 10ಆದುದರಿಂದ ದೇವರ ಮಕ್ಕಳು
ಯಾರೆಂಬುದನ್ನೂ ಸೈತಾನನ ಮಕ್ಕಳು ಯಾರೆಂಬುದನ್ನೂ
ನಾವು ತಿಳಿದುಕೊಳ್ಳಬಹುದು. ಯೋಗ್ಯವಾದುದನ್ನು ಮಾಡ
ದಿರುವ ಜನರು ದೇವರ ಮಕ್ಕಳಲ್ಲ. ತನ್ನ ಸಹೋದರನನ್ನು
ಪ್ರೀತಿಸದಿರುವವನು ದೇವರ ಮಗನಲ್ಲ.

### ನಾವು ಒಬ್ಬರನ್ನೊಬ್ಬರು ಪ್ರೀತಿಸಬೇಕು

11ನಾವು ಒಬ್ಬರನ್ನೊಬ್ಬರು ಪ್ರೀತಿಸಬೇಕು ಎಂಬುದೇ ನೀವು
ಆರಂಭದಿಂದಲೂ ಕೇಳಿದ ವಾಕ್ಯ. 12ನೀವು ಕಾಯಿನ
ನಂತಿರಬೇಡಿ. ಅವನು ಕೆಡುಕನಿಗೆ ಸೇರಿದವನಾಗಿದ್ದನು. ಅವನು
ತನ್ನ ತಮ್ಮನನ್ನು (ಹೇಬೆಲ) ಕೊಂದುಹಾಕಿದನು. ಅವನು ತನ್ನ
ತಮ್ಮನನ್ನು ಕೊಂದದ್ದೇಕೆ? ತನ್ನ ಕೃತ್ಯಗಳು ಕೆಟ್ಟವುಗಳೂ ತನ್ನ
ತಮ್ಮನ ಕೃತ್ಯಗಳು ಒಳ್ಳೆಯವುಗಳೂ ಆಗಿದ್ದರಿಂದಲೇ.

13ಸಹೋದರ ಸಹೋದರಿಯರೇ, ಈ ಲೋಕದ ಜನರು
ನಿಮ್ಮನ್ನು ದ್ವೇಷಿಸುವಾಗ ಆಶ್ಚರ್ಯಗೊಳ್ಳದಿರಿ. 14ನಾವು ಮರಣ
ವನ್ನು (ಪಾಪಗಳನ್ನು) ತೊರೆದು ಜೀವಕ್ಕೆ ಬಂದಿದ್ದೇವೆ
ಎಂಬುದು ನಮಗೆ ಗೊತ್ತಿದೆ. ಕ್ರಿಸ್ತನಲ್ಲಿ ನಮ್ಮ ಸಹೋದರ
ಸಹೋದರಿಯರನ್ನು ನಾವು ಪ್ರೀತಿಸುತ್ತಿರುವುದರಿಂದಲೇ
ಇದನ್ನು ತಿಳಿದುಕೊಂಡಿದ್ದೇವೆ. ಪ್ರೀತಿಸದಿರುವ ವ್ಯಕ್ತಿಯು ಇನ್ನೂ
ಮರಣದಲ್ಲಿದ್ದಾನೆ. 15ತನ್ನ ಸಹೋದರನನ್ನು ದ್ವೇಷಿಸುವ ಪ್ರತಿ
ಯೊಬ್ಬನೂ ಕೊಲೆಗಾರನಾಗಿದ್ದಾನೆ. ಯಾವ ಕೊಲೆಗಾರ
ನಲ್ಲಿಯೂ ನಿತ್ಯಜೀವ ಇರುವುದಿಲ್ಲವೆಂಬುದು ನಿಮಗೆ ತಿಳಿದಿದೆ.
16ಯೇಸು ತನ್ನ ಪ್ರಾಣವನ್ನೇ ಕೊಟ್ಟದ್ದರಿಂದ ನಿಜವಾದ ಪ್ರೀತಿ
ಯೆಂದರೇನೆಂಬುದನ್ನು ನಾವು ತಿಳಿದುಕೊಂಡೆವು. ಆದ್ದರಿಂದ
ಕ್ರಿಸ್ತನಲ್ಲಿ ಸಹೋದರ ಸಹೋದರಿಯರಾದವರಿಗೋಸ್ಕರ
ನಾವೂ ನಮ್ಮ ಪ್ರಾಣಗಳನ್ನು ಕೊಡಬೇಕು. 17ಈ ಲೋಕದ
ಐಶ್ವರ್ಯವನ್ನು ಹೊಂದಿರುವ ಯಾವನಾದರೂ ಕೊರತೆ
ಯಲ್ಲಿರುವ ತನ್ನ ಸಹೋದರನನ್ನು ನೋಡಿದರೂ ಸಹಾಯ
ಮಾಡದೆ ಹೋದರೆ, ಅವನಲ್ಲಿ ದೇವರ ಪ್ರೀತಿಯು ನೆಲೆ
ಗೊಂಡಿಲ್ಲ. ಅವನೇಕೆ ಸಹಾಯ ಮಾಡಲಿಲ್ಲ? ಏಕೆಂದರೆ ಅವನ
ಹೃದಯದಲ್ಲಿ ದೇವರ ಮೇಲೆ ಪ್ರೀತಿಯೇ ಇಲ್ಲ. 18ನನ್ನ
ಮಕ್ಕಳೇ, ನಮ್ಮ ಪ್ರೀತಿಯು ಕೇವಲ ಶಬ್ದಗಳಲ್ಲಿ ಮತ್ತು ಮಾತಿ
ನಲ್ಲಿ ಇರಬಾರದು. ನಮ್ಮ ಪ್ರೀತಿಯು ನಿಜವಾದ ಪ್ರೀತಿಯಾಗಿರ
ಬೇಕು. ನಾವು ಮಾಡುವ ಕಾರ್ಯಗಳಲ್ಲಿಯೇ ನಮ್ಮ ಪ್ರೀತಿ
ಯನ್ನು ತೋರ್ಪಡಿಸಬೇಕು.

19-20ನಾವು ಸತ್ಯಮಾರ್ಗಕ್ಕೆ ಸೇರಿದವರೆಂಬುದನ್ನು ಈ
ಮೂಲಕವಾಗಿಯೇ ತಿಳಿದುಕೊಳ್ಳುತ್ತೇವೆ. ನಮ್ಮ ಮನ
ಸ್ಸಾಕ್ಷಿಯು ನಮ್ಮನ್ನು ತಪ್ಪಿತಸ್ಥರೆಂದು ಹೇಳಿದರೂ ನಾವು ದೇವರ
ಎದುರಿನಲ್ಲಿ ಸಮಾಧಾನದಿಂದಿರಲು ಸಾಧ್ಯ. ಏಕೆಂದರೆ ನಮ್ಮ
ಮನಸ್ಸಾಕ್ಷಿಗಿಂತ ದೇವರೇ ದೊಡ್ಡವನು. ಆತನಿಗೆ ಎಲ್ಲವೂ
ತಿಳಿದಿದೆ. 21ನನ್ನ ಪ್ರಿಯ ಸ್ನೇಹಿತರೇ, ನಾವು ತಪ್ಪು ಮಾಡುತ್ತಿಲ್ಲ
ಎಂದು ನಮಗೆ ತಿಳಿದಿದ್ದರೆ, ನಾವು ದೇವರ ಬಳಿಗೆ ಧೈರ್ಯವಾಗಿ
ಬರಲು ಸಾಧ್ಯ. 22ಮತ್ತು ನಾವು ಕೇಳಿಕೊಳ್ಳುವವುಗಳನ್ನು
ದೇವರು ನಮಗೆ ನೀಡುತ್ತಾನೆ. ನಾವು ಆತನಿಗೆ ವಿಧೇಯರಾಗಿರು
ವುದರಿಂದ ಮತ್ತು ಆತನಿಗೆ ಮೆಚ್ಚಿಕೆಯಾದ ಕಾರ್ಯಗಳನ್ನು
ಮಾಡುವುದರಿಂದ ಅವುಗಳನ್ನು ಆತನಿಂದ ಪಡೆದು
ಕೊಳ್ಳುತ್ತೇವೆ. 23ದೇವರ ಆಜ್ಞೆ ಏನೆಂದರೆ, ಆತನ ಮಗನಾದ
ಯೇಸು ಕ್ರಿಸ್ತನಲ್ಲಿ ನಾವು ನಂಬಿಕೆಯಿಟ್ಟು ಒಬ್ಬರನ್ನೊಬ್ಬರು
ಪ್ರೀತಿಸಬೇಕು ಎಂಬುದೇ. 24ದೇವರ ಆಜ್ಞೆಗಳಿಗೆ ವಿಧೇಯ
ನಾಗಿರುವವನು ದೇವರಲ್ಲಿ ನೆಲೆಸಿರುತ್ತಾನೆ. ಮತ್ತು ದೇವರು
ಆತನಲ್ಲಿ ನೆಲಸಿರುತ್ತಾನೆ. ದೇವರು ನಮ್ಮಲ್ಲಿ ನೆಲೆಸಿದ್ದಾನೆ
ಎಂಬುದು ನಮಗೆ ಹೇಗೆ ತಿಳಿದದೆ? ದೇವರು ನಮಗೆ
ದಯಪಾಲಿಸಿರುವ ಪವಿತ್ರಾತ್ಮನಿಂದಲೇ ನಮಗೆ ತಿಳಿದದೆ.

### ಸುಳ್ಳುಬೋಧಕರ ವಿರುದ್ಧ ಯೋಹಾನನ ಎಚ್ಚರಿಕೆ

4 ನನ್ನ ಪ್ರಿಯ ಸ್ನೇಹಿತರೇ, ಈಗ ಲೋಕದಲ್ಲಿ ಅನೇಕ
ಸುಳ್ಳುಪ್ರವಾದಿಗಳಿದ್ದಾರೆ. ಆದ್ದರಿಂದ ಪ್ರತಿಯೊಂದು ಆತ್ಮ
ವನ್ನೂ ನಂಬಬೇಡಿ. ಆದರೆ ಆ ಆತ್ಮಗಳು ದೇವರಿಂದ ಬಂದ
ವುಗಳೇ ಎಂಬುದನ್ನು ಪರೀಕ್ಷಿಸಿ ತಿಳಿದುಕೊಳ್ಳಿರಿ. 2ದೇವರಾತ್ಮ
ವನ್ನು ನೀವು ಇದೇ ರೀತಿ ತಿಳಿದುಕೊಳ್ಳಲು ಸಾಧ್ಯ. ‘‘ಈ ಲೋಕಕ್ಕೆ
ಮನುಷ್ಯನಾಗಿ ಬಂದ ಯೇಸುವೇ ಕ್ರಿಸ್ತನೆಂದು ನಾನು ನಂಬು
ತ್ತೇನೆ’’ ಎಂದು ಹೇಳುವ ಆತ್ಮವು ದೇವರಿಂದ ಬಂದದ್ದಾಗಿದೆ.
3ಯೇಸುವಿನ ಬಗ್ಗೆ ಹೀಗೆ ಹೇಳದ ಆತ್ಮವು ದೇವರಿಂದ ಬಂದ
ದ್ದಲ್ಲ. ಅದು ಕ್ರಿಸ್ತವಿರೋಧಿಯ ಆತ್ಮ. ಕ್ರಿಸ್ತವಿರೋಧಿಯು ಬರು
ತ್ತಾನೆ ಎಂಬುದನ್ನು ನೀವು ಕೇಳಿರುವಿರಿ. ಕ್ರಿಸ್ತ ವಿರೋಧಿಯು
ಈಗಾಗಲೇ ಈ ಲೋಕದಲ್ಲಿದ್ದಾನೆ.

4ನನ್ನ ಪ್ರಿಯ ಮಕ್ಕಳೇ, ನೀವು ದೇವರಿಗೆ ಸೇರಿದವರು.
ಆದ್ದರಿಂದ ನೀವು ಅವರನ್ನು (ಸುಳ್ಳು ಬೋಧಕರನ್ನು)

ಸೋಲಿಸಿದ್ದೀರಿ, ಏಕೆಂದರೆ ನಿಮ್ಮಲ್ಲಿರುವಾತನು (ದೇವರು) ಈ
ಲೋಕದ ಜನರಲ್ಲಿರುವವನಿಗಿಂತ (ಸೈತಾನ) ದೊಡ್ಡವ
ನಾಗಿದ್ದಾನೆ. [5]ಆ ಜನರು (ಸುಳ್ಳುಬೋಧಕರು) ಈ ಲೋಕಕ್ಕೆ
ಸೇರಿದವರಾಗಿದ್ದಾರೆ. ಆದ್ದರಿಂದ ಅವರು ಹೇಳುವುದೆಲ್ಲವೂ ಈ
ಲೋಕಕ್ಕೆ ಸೇರಿವೆ. ಅವರು ಏನನ್ನು ಹೇಳಿದರೂ ಲೋಕವು
ಕೇಳುತ್ತದೆ. [6]ನಾವಾದರೊ ದೇವರಿಂದ ಬಂದವರು. ಆದ್ದರಿಂದ
ದೇವರನ್ನು ಬಲ್ಲ ಜನರು ನಮಗೆ ಕಿವಿಗೊಡುತ್ತಾರೆ. ಆದರೆ
ದೇವರಿಂದ ಬಂದಿಲ್ಲದ ಜನರು ನಮ್ಮ ಮಾತುಗಳನ್ನು ಕೇಳು
ವುದಿಲ್ಲ. ಯಾವುದು ಸತ್ಯವನ್ನು ಬೋಧಿಸುವ ಆತ್ಮ, ಯಾವುದು
ಸುಳ್ಳನ್ನು ಬೋಧಿಸುವ ಆತ್ಮ ಎಂಬುದನ್ನು ಹೀಗೆ ತಿಳಿದು
ಕೊಳ್ಳುತ್ತೇವೆ.

## ಪ್ರೀತಿಯು ದೇವರಿಂದ ಬರುತ್ತದೆ

[7]ಪ್ರಿಯ ಸ್ನೇಹಿತರೇ, ಪ್ರೀತಿಯು ದೇವರಿಂದ ಬಂದಿರುವುದ
ರಿಂದ ನಾವು ಒಬ್ಬರನ್ನೊಬ್ಬರು ಪ್ರೀತಿಸಬೇಕು. ಪ್ರೀತಿಸುವವನು
ದೇವರಿಂದ ಹೊಸದಾಗಿ ಹುಟ್ಟಿದವನಾಗಿದ್ದಾನೆ. ಆದ್ದರಿಂದ
ಅವನು ದೇವರನ್ನು ಬಲ್ಲವನಾಗಿರುತ್ತಾನೆ. [8]ಪ್ರೀತಿಸದಿರು
ವವನು ದೇವರನ್ನು ತಿಳಿದಿಲ್ಲ. ಏಕೆಂದರೆ ದೇವರು ಪ್ರೀತಿ
ಸ್ವರೂಪಿ. [9]ದೇವರು ತನ್ನ ಒಬ್ಬನೇ ಮಗನ ಮೂಲಕ ನಮಗೆ
ಜೀವವನ್ನು ಕೊಡುವುದಕ್ಕಾಗಿ ಆತನನ್ನು ಈ ಲೋಕಕ್ಕೆ
ಕಳುಹಿಸಿದನು. ಹೀಗೆ ದೇವರು ತನ್ನ ಪ್ರೀತಿಯನ್ನು ನಮಗೆ
ತೋರಿಸಿದ್ದಾನೆ. [10]ದೇವರಿಗೆ ನಮ್ಮ ಮೇಲಿರುವ ಪ್ರೀತಿಯೇ
ನಿಜವಾದ ಪ್ರೀತಿ. ನಮಗೆ ದೇವರ ಮೇಲಿರುವ ಪ್ರೀತಿ ನಿಜವಾದ
ಪ್ರೀತಿಯಲ್ಲ. ನಮ್ಮ ಪಾಪಗಳನ್ನು ನಿವಾರಣೆ ಮಾಡುವ ಮಾರ್ಗ
ವಾಗಿರಲೆಂದು ದೇವರು ತನ್ನ ಮಗನನ್ನು ಕಳುಹಿಸಿಕೊಟ್ಟನು.

[11]ಪ್ರಿಯ ಸ್ನೇಹಿತರೇ, ಹೀಗೆ ದೇವರು ನಮ್ಮನ್ನು ಬಹಳವಾಗಿ
ಪ್ರೀತಿಸಿದನು! ಆದ್ದರಿಂದ ನಾವು ಒಬ್ಬರನ್ನೊಬ್ಬರು ಪ್ರೀತಿಸ
ಬೇಕು. [12]ದೇವರನ್ನು ಯಾರೂ ಎಂದೂ ನೋಡಿಲ್ಲ. ಆದರೆ
ನಾವು ಒಬ್ಬರನ್ನೊಬ್ಬರು ಪ್ರೀತಿಸಿದರೆ, ದೇವರು ನಮ್ಮಲ್ಲಿ ನೆಲೆ
ಸಿರುತ್ತಾನೆ. ನಾವು ಒಬ್ಬರನ್ನೊಬ್ಬರು ಪ್ರೀತಿಸಿದರೆ, ದೇವರ
ಪ್ರೀತಿಯು ನಮ್ಮಲ್ಲಿ ಪರಿಪೂರ್ಣವಾದ ಮಟ್ಟವನ್ನು
ತಲುಪುತ್ತದೆ.

[13]ನಾವು ದೇವರಲ್ಲಿ ನೆಲೆಸಿದ್ದೇವೆ ಮತ್ತು ದೇವರು ನಮ್ಮಲ್ಲಿ
ನೆಲೆಸಿದ್ದಾನೆ ಎಂಬುದು ನಮಗೆ ತಿಳಿದದೆ. ದೇವರು ನಮಗೆ ತನ್ನ
ಆತ್ಮವನ್ನು ಕೊಟ್ಟಿರುವುದರಿಂದ ಇದು ನಮಗೆ ತಿಳಿದಿದೆ.
[14]ದೇವರು ತನ್ನ ಮಗನನ್ನು ಲೋಕರಕ್ಷಕನನ್ನಾಗಿ ಕಳುಹಿ
ಸಿದ್ದನ್ನು ನಾವು ನೋಡಿದ್ದೇವೆ. ನಾವು ಈಗ ಜನರಿಗೆ ಹೇಳುತ್ತಿರು
ವುದು ಅದನ್ನೇ. [15]“ಯೇಸುವೇ ದೇವರ ಮಗನೆಂದು ನಾನು
ನಂಬುತ್ತೇನೆ” ಎಂದು ಹೇಳುವವನಲ್ಲಿ ದೇವರು ನೆಲೆಸಿದ್ದಾನೆ
ಮತ್ತು ಅವನು ದೇವರಲ್ಲಿ ನೆಲೆಸಿದ್ದಾನೆ. [16]ಹೀಗಿರಲಾಗಿ ನಮ್ಮ
ಮೇಲೆ ದೇವರಿಗಿರುವ ಪ್ರೀತಿಯನ್ನು ನಾವು ತಿಳಿದುಕೊಂಡಿ
ದ್ದೇವೆ. ನಾವು ಆ ಪ್ರೀತಿಯಲ್ಲಿ ಭರವಸವಿಟ್ಟದ್ದೇವೆ.

ದೇವರು ಪ್ರೀತಿಸ್ವರೂಪಿ. ಪ್ರೀತಿಯಲ್ಲಿ ನೆಲೆಸಿರುವವನು
ದೇವರಲ್ಲಿ ನೆಲೆಸಿದ್ದಾನೆ. ದೇವರೂ ಅವನಲ್ಲಿ ನೆಲೆಸಿದ್ದಾನೆ.
[17]ಹೀಗೆ ಪ್ರೀತಿಯು ನಮ್ಮಲ್ಲಿ ಪರಿಪೂರ್ಣವಾಗುವುದರಿಂದ
ದೇವರು ನಮಗೆ ತೀರ್ಪು ನೀಡುವ ದಿನದಂದು ನಾವು ನಿರ್ಭಯ
ದಿಂದಿರುತ್ತೇವೆ. ಈ ಲೋಕದಲ್ಲಿ ನಾವು ಆತನಂತೆಯೇ (ಕ್ರಿಸ್ತನು
ಅಥವಾ ದೇವರು) ಇರುವುದರಿಂದ ನಾವು ಧೈರ್ಯದಿಂದಿರು
ತ್ತೇವೆ. [18]ದೇವರ ಪ್ರೀತಿಯು ಎಲ್ಲಿರುವುದೋ ಅಲ್ಲಿ ಭಯವಿರು
ವುದಿಲ್ಲ. ಏಕೆಂದರೆ ದೇವರ ಪರಿಪೂರ್ಣ ಪ್ರೀತಿಯು
ಭಯವನ್ನು ತೆಗೆದುಹಾಕುತ್ತದೆ. ದೇವರ ದಂಡನೆಯೇ ಒಬ್ಬ
ವ್ಯಕ್ತಿಯಲ್ಲಿ ಭಯವನ್ನು ಉಂಟುಮಾಡುವಂಥದ್ದು. ಆದ್ದರಿಂದ
ಭಯವಿರುವವನಲ್ಲಿ ದೇವರ ಪ್ರೀತಿ ಪರಿಪೂರ್ಣವಾಗಿಲ್ಲ.

[19]ದೇವರು ನಮ್ಮನ್ನು ಮೊದಲು ಪ್ರೀತಿಸಿದ್ದರಿಂದಲೇ ನಾವು
ಆತನನ್ನು ಪ್ರೀತಿಸುತ್ತೇವೆ. [20]“ನಾನು ದೇವರನ್ನು ಪ್ರೀತಿಸು
ತ್ತೇನೆ” ಎಂದು ಹೇಳಿಕೊಳ್ಳುವವನು ತನ್ನ ಸಹೋದರನನ್ನಾಗಲಿ
ಸಹೋದರಿಯನ್ನಾಗಲಿ ದ್ವೇಷಿಸಿದರೆ, ಅವನು ಸುಳ್ಳುಗಾರ
ನಾಗಿದ್ದಾನೆ. ಅವನು ತನ್ನ ಸಹೋದರನನ್ನು ಕಣ್ಣಾರೆ ನೋಡು
ತ್ತಿದ್ದರೂ ಅವನನ್ನು ದ್ವೇಷಿಸುತ್ತಾನೆ. ಆದ್ದರಿಂದ ಅವನು ದೇವ
ರನ್ನು ಪ್ರೀತಿಸಲಾಗುವುದಿಲ್ಲ. ಏಕೆಂದರೆ ಅವನು ದೇವರನ್ನು
ಎಂದೂ ನೋಡಿಲ್ಲ! [21]ದೇವರನ್ನು ಪ್ರೀತಿಸುವವನು ತನ್ನ
ಸಹೋದರನನ್ನೂ ಪ್ರೀತಿಸಬೇಕೆಂಬುದು ದೇವರು ನಮಗೆ
ನೀಡಿರುವ ಆಜ್ಞೆಯಾಗಿದೆ.

## ದೇವರ ಮಕ್ಕಳು ಲೋಕದ ವಿರುದ್ಧ ಜಯಗಳಿಸುವರು

5 ಯೇಸುವೇ ಕ್ರಿಸ್ತನೆಂದು ನಂಬುವವರು ದೇವರ
ಮಕ್ಕಳಾಗಿದ್ದಾರೆ. ತಂದೆಯನ್ನು (ದೇವರನ್ನು) ಪ್ರೀತಿಸು
ವವನು ತಂದೆಯ ಮಕ್ಕಳನ್ನೂ ಪ್ರೀತಿಸುತ್ತಾನೆ. [2]ನಾವು ದೇವರ
ಮಕ್ಕಳನ್ನು ಪ್ರೀತಿಸುತ್ತಿದ್ದೇವೆಂಬುದು ನಮಗೆ ಹೇಗೆ ತಿಳಿದಿದೆ?
ನಾವು ದೇವರನ್ನು ಪ್ರೀತಿಸುತ್ತಿರುವುದರಿಂದ ಮತ್ತು ಆತನ
ಆಜ್ಞೆಗಳಿಗೆ ವಿಧೇಯರಾಗಿರುವುದರಿಂದ ನಮಗೆ ತಿಳಿದಿದೆ.
[3]ದೇವರನ್ನು ಪ್ರೀತಿಸುವುದು ಎಂದರೆ ಆತನ ಆಜ್ಞೆಗಳಿಗೆ
ವಿಧೇಯರಾಗಿರುವುದು. ದೇವರ ಆಜ್ಞೆಗಳು ನಮಗೆ ಕಠಿಣ
ವಾದವುಗಳಲ್ಲ. [4]ಏಕೆಂದರೆ ದೇವರಿಂದ ಹೊಸದಾಗಿ ಹುಟ್ಟಿರುವ
ಪ್ರತಿಯೊಬ್ಬನೂ ಲೋಕದ ವಿರುದ್ಧ ಗೆಲ್ಲುವ ಶಕ್ತಿಯನ್ನು
ಹೊಂದಿದ್ದಾನೆ. [5]ಲೋಕದ ವಿರುದ್ಧ ಜಯಗಳಿಸಿದ್ದು ನಮ್ಮ
ನಂಬಿಕೆಯೇ. ಆದ್ದರಿಂದ ಲೋಕದ ವಿರುದ್ಧ ಜಯಗಳಿಸು
ವವನು ಯಾರು? ಯೇಸುವನ್ನು ದೇವರ ಮಗನೆಂದು ನಂಬುವ
ವ್ಯಕ್ತಿಯು ಮಾತ್ರ ಜಯಗಳಿಸುತ್ತಾನೆ.

## ದೇವರು ತನ್ನ ಮಗನನ್ನು ಕುರಿತು ನಮಗೆ ತಿಳಿಸಿದನು

[6]ಬಂದಾತನೇ ಯೇಸು ಕ್ರಿಸ್ತನು. ಯೇಸು ನೀರಿನಿಂದ ಮತ್ತು
ರಕ್ತದಿಂದ ಬಂದನು. ನೀರಿನಿಂದ ಮಾತ್ರವಲ್ಲದೆ ನೀರಿನಿಂದ
ಮತ್ತು ರಕ್ತದಿಂದ ಬಂದನು. ಇದು ನಿಜವೆಂದು ನಮಗೆ ಆತ್ಮನು
ತಿಳಿಸುತ್ತಾನೆ, ಏಕೆಂದರೆ ಆತ್ಮನು ಸತ್ಯಸ್ವರೂಪನಾಗಿದ್ದಾನೆ.
[7]ಆದುದರಿಂದ ಯೇಸುವಿನ ಬಗ್ಗೆ ನಮಗೆ ತಿಳಿಸಲು ಮೂರು
ಸಾಕ್ಷಿಗಳಿವೆ: [8]ಆತ್ಮ, ನೀರು ಮತ್ತು ರಕ್ತ. ಈ ಮೂರು ಸಾಕ್ಷಿಗಳ
ಅಭಿಪ್ರಾಯವು ಒಂದೇ. [9]ಜನರು ಸಾಕ್ಷಿ ಹೇಳಿದಾಗ ನಾವು
ನಂಬುತ್ತೇವೆ. ಆದರೆ ದೇವರ ಸಾಕ್ಷಿಯು ಅದಕ್ಕಿಂತಲೂ
ವಿಶೇಷವಾಗಿದೆ. ದೇವರು ತನ್ನ ಸ್ವಂತ ಮಗನ ಕುರಿತು ಹೇಳಿದ
ಸತ್ಯವೇ ಆತನು ನಮಗೆ ನೀಡಿದ ಸಾಕ್ಷಿಯಾಗಿದೆ. [10]ದೇವರ
ಮಗನನ್ನು ನಂಬುವವನು ದೇವರಿಂದ ಸಾಕ್ಷೀಕರಿಸಲ್ಪಟ್ಟ ಸತ್ಯ
ವನ್ನು ಹೊಂದಿರುತ್ತಾನೆ. ದೇವರನ್ನು ನಂಬದೆ ಇರುವವನು,
ದೇವರನ್ನು ಸುಳ್ಳುಗಾರನನ್ನಾಗಿ ಮಾಡುತ್ತಾನೆ. ಏಕೆಂದರೆ

ದೇವರು ತನ್ನ ಮಗನ ಬಗ್ಗೆ ನಮಗೆ ಹೇಳಿದುದನ್ನು ಅವನು
ನಂಬುವುದಿಲ್ಲ. 11ನಮಗೆ ನಿತ್ಯ ಜೀವವನ್ನು ತಾನು ದಯ
ಪಾಲಿಸಿರುವುದಾಗಿ ದೇವರು ಹೇಳಿದನು. ಈ ನಿತ್ಯಜೀವವು ಆತನ
ಮಗನಲ್ಲಿದೆ (ಯೇಸು). 12ಯಾವನಲ್ಲಿ ಆ ಮಗನಿರುತ್ತಾನೋ
ಅವನಲ್ಲಿ ಆ ಜೀವವಿದೆ. ಆದರೆ ಯಾವನಲ್ಲಿ ದೇವರ ಮಗನು
ಇರುವುದಿಲ್ಲವೋ ಅವನಲ್ಲಿ ಆ ಜೀವವಿಲ್ಲ.

### ಈಗ ನಮಗೆ ನಿತ್ಯಜೀವವಿದೆ

13ದೇವರ ಮಗನಲ್ಲಿ ನಂಬಿಕೆಯಿಟ್ಟರುವ ನಿಮಗೆ ನಾನು ಈ
ಪತ್ರವನ್ನು ಬರೆಯುತ್ತಿದ್ದೇನೆ. ಈಗ ನಿಮಗೆ ನಿತ್ಯಜೀವವಿದೆ
ಎಂಬುದು ನಿಮಗೆ ಗೊತ್ತಾಗುವಂತೆ ನಾನು ಈ ಪತ್ರ ಬರೆಯು
ತ್ತಿದ್ದೇನೆ. 14ನಾವು ಯಾವ ಸಂದೇಹಗಳೂ ಇಲ್ಲದೆ ದೇವರ ಬಳಿಗೆ
ಬರಲು ಸಾಧ್ಯವಿದೆ. ಇದರ ಅರ್ಥವೇನೆಂದರೆ (ದೇವರ ಚಿತ್ತ
ಕ್ಕನುಸಾರವಾಗಿ) ನಮಗೆ ಬೇಕಾದವುಗಳಿಗಾಗಿ ದೇವರನ್ನು ಕೇಳಿ
ಕೊಂಡರೆ ಆತನು ನಮ್ಮ ವಿಜ್ಞಾಪನೆಯನ್ನು ಕೇಳುತ್ತಾನೆ. 15ನಾವು
ದೇವರನ್ನು ಬೇಡಿಕೊಂಡಾಗಲೆಲ್ಲಾ ಆತನು ನಮ್ಮ ಬೇಡಿಕೆ
ಗಳನ್ನು ಕೇಳುವುದರಿಂದ ಆತನಲ್ಲಿ ಬೇಡಿಕೊಂಡದ್ದನ್ನು ಆತನು
ನಮಗೆ ದಯಪಾಲಿಸುತ್ತಾನೆಂಬುದು ನಮಗೆ ತಿಳಿದಿದೆ.

16ಕ್ರಿಸ್ತನಲ್ಲಿ ಸಹೋದರನಾಗಲಿ ಅಥವಾ ಸಹೋದರಿ
ಯಾಗಲಿ ಪಾಪ ಮಾಡುವುದನ್ನು (ನಿತ್ಯವಾದ ಮರಣಕ್ಕೆ
ನಡೆಸುವ ಪಾಪವನ್ನಲ್ಲ) ಕಂಡ ವ್ಯಕ್ತಿಯು ತನ್ನ ಆ ಸಹೋದರ
ನಿಗಾಗಿ ಅಥವಾ ಆ ಸಹೋದರಿಗಾಗಿ ಪ್ರಾರ್ಥಿಸಬೇಕು. ಆಗ
ದೇವರು ಆ ಸಹೋದರನಿಗೆ ಅಥವಾ ಆ ಸಹೋದರಿಗೆ
ಜೀವವನ್ನು ದಯಪಾಲಿಸುತ್ತಾನೆ. ಶಾಶ್ವತವಾದ ಮರಣದ ಕಡೆಗೆ
ನಡೆಸದಿರುವ ಪಾಪವನ್ನು ಮಾಡುವವರ ಬಗ್ಗೆ ನಾನು
ಹೇಳುತ್ತಿದ್ದೇನೆ. ಮರಣದ ಕಡೆಗೆ ನಡೆಸುವ ಪಾಪವಿದೆ. ಈ ಪಾಪ
ಮಾಡುವವರಿಗಾಗಿ ಪ್ರಾರ್ಥಿಸಬೇಕೆಂದು ನಾನು ಹೇಳುತ್ತಿಲ್ಲ.
17ನೀತಿಗೆ ವಿರುದ್ಧವಾದುದೆಲ್ಲಾ ಪಾಪವಾಗಿದೆ. ಆದರೆ ಶಾಶ್ವತ
ಮರಣದ ಕಡೆಗೆ ಕೊಂಡೊಯ್ಯದಿರುವ ಪಾಪವೂ ಇದೆ.

18ದೇವರಿಂದ ಹೊಸದಾಗಿ ಹುಟ್ಟಿದವನು ಪಾಪದಲ್ಲೇ
ಮುಂದುವರಿಯುವುದಿಲ್ಲವೆಂದು ನಮಗೆ ತಿಳಿದಿದೆ. ದೇವರ
ಮಗನಾದ ಯೇಸು ಅವನನ್ನು ಸುರಕ್ಷಿತವಾಗಿ ಕಾಪಾಡುತ್ತಾನೆ.
ಕೆಡುಕನು ಅವನಿಗೆ ಕೇಡು ಮಾಡಲಾಗುವುದಿಲ್ಲ. 19ನಾವು
ದೇವರಿಗೆ ಸೇರಿದವರೆಂಬುದು ನಮಗೆ ತಿಳಿದಿದೆ. ಆದರೆ ಈ
ಲೋಕವು ಕೆಡುಕನ ವಶದಲ್ಲಿದೆ. 20ದೇವರ ಮಗನು ಬಂದಿ
ದ್ದಾನೆಂಬುದು ನಮಗೆ ತಿಳಿದಿದೆ. ದೇವರ ಮಗನು ನಮಗೆ ತಿಳು
ವಳಿಕೆಯನ್ನು ದಯಪಾಲಿಸಿರುವನು. ಈಗ ನಾವು ದೇವರನ್ನು
ತಿಳಿದುಕೊಳ್ಳಬಲ್ಲೆವು. ಸತ್ಯವಾಗಿರುವಾತನು ದೇವರೇ. ಸತ್ಯ
ದೇವರಲ್ಲಿಯೂ ಮತ್ತು ಆತನ ಮಗನಾದ ಯೇಸು ಕ್ರಿಸ್ತ
ನಲ್ಲಿಯೂ ನಾವು ನೆಲೆಸಿದ್ದೇವೆ. ಆತನು ಸತ್ಯದೇವರೂ ನಿತ್ಯ
ಜೀವವೂ ಆಗಿದ್ದಾನೆ. 21ಆದ್ದರಿಂದ ಪ್ರಿಯ ಮಕ್ಕಳೇ, ನೀವು
ಸುಳ್ಳುದೇವರುಗಳಿಂದ ದೂರವಾಗಿರಿ.

# ಯೋಹಾನನು ಬರೆದ ಎರಡನೆ ಪತ್ರ

ಸಭಾಹಿರಿಯನು, ದೇವರಿಂದ ಆಯ್ಕೆಯಾದ ಅಮ್ಮನವರಿಗೆ ಮತ್ತು ಆಕೆಯ ಮಕ್ಕಳಿಗೆ ಬರೆಯುವ ಪತ್ರ.

ನಾನು ನಿಮ್ಮೆಲ್ಲರನ್ನು ಸತ್ಯದಲ್ಲಿ ಪ್ರೀತಿಸುತ್ತೇನೆ. ಸತ್ಯವನ್ನು ತಿಳಿದಿರುವ ಜನರೆಲ್ಲರೂ ಸಹ ನಿಮ್ಮನ್ನು ಪ್ರೀತಿಸುತ್ತಾರೆ.
2ನಮ್ಮಲ್ಲಿ ನೆಲೆಗೊಂಡಿರುವ ಸತ್ಯದ ನಿಮಿತ್ತ ನಾವು ನಿಮ್ಮನ್ನು ಪ್ರೀತಿಸುತ್ತೇವೆ. ಈ ಸತ್ಯವು ನಮ್ಮಲ್ಲಿ ಸದಾಕಾಲ ಇರುವುದು.

3ತಂದೆಯಾದ ದೇವರಿಂದಲೂ ಆತನ ಮಗನಾದ ಯೇಸು ಕ್ರಿಸ್ತನಿಂದಲೂ ಕೃಪೆ, ಕರುಣೆ ಮತ್ತು ಶಾಂತಿ ನಮ್ಮೊಂದಿಗಿರುತ್ತವೆ. ನಾವು ಈ ಆಶೀರ್ವಾದಗಳನ್ನು ಸತ್ಯದ ಮತ್ತು ಪ್ರೀತಿಯ ಮೂಲಕ ಪಡೆಯುತ್ತೇವೆ.

4ನಿಮ್ಮ ಮಕ್ಕಳಲ್ಲಿ ಕೆಲವರ ಬಗ್ಗೆ ನಾನು ಕೇಳಿದಾಗ ತುಂಬಾ ಸಂತೋಷವಾಯಿತು. ತಂದೆಯಾದ ದೇವರು ನಮಗೆ ಆಜ್ಞಾಪಿಸಿದ ಸತ್ಯಮಾರ್ಗವನ್ನು ಅವರು ಅನುಸರಿಸುತ್ತಿರುವುದರಿಂದ ನನಗೆ ಸಂತೋಷವಾಯಿತು.
5ಪ್ರಿಯ ಅಮ್ಮನವರೇ, ಈಗ ನಾನು ನಿಮ್ಮನ್ನು ಕೇಳಿಕೊಳ್ಳುವುದೇನಂದರೆ, ನಾವು ಒಬ್ಬರನ್ನೊಬ್ಬರು ಪ್ರೀತಿಸಬೇಕು. ಇದು ಹೊಸ ಆಜ್ಞೆಯಾಗಿರದೆ ಮೊದಲಿನಿಂದಲೂ ಇದ್ದ ಆಜ್ಞೆಯಾಗಿದೆ.
6ಆತನು ಆಜ್ಞಾಪಿಸಿದ ಮಾರ್ಗದಲ್ಲಿ ಜೀವಿಸುವುದೇ ಪ್ರೀತಿ. ನೀವು ಪ್ರೀತಿಯಿಂದ ಬಾಳಬೇಕೆಂಬುದೇ ದೇವರ ಆಜ್ಞೆ. ನೀವು ಆರಂಭದಿಂದಲೂ ಈ ಆಜ್ಞೆಯನ್ನು ಕೇಳಿರುವಿರಿ.

7ಈಗ ಲೋಕದಲ್ಲಿ ಅನೇಕ ಸುಳ್ಳುಬೋಧಕರಿದ್ದಾರೆ. ಯೇಸು ಕ್ರಿಸ್ತನು ಈ ಲೋಕಕ್ಕೆ ಮನುಷ್ಯನಾಗಿ ಬಂದನೆಂಬುದನ್ನು ಈ ಸುಳ್ಳುಬೋಧಕರು ಒಪ್ಪಿಕೊಳ್ಳುವುದಿಲ್ಲ. ಈ ಸತ್ಯವನ್ನು ಒಪ್ಪಿಕೊಳ್ಳದವನು ಸುಳ್ಳುಬೋಧಕನಾಗಿದ್ದಾನೆ ಮತ್ತು ಯೇಸು ಕ್ರಿಸ್ತನ ವೈರಿಯಾಗಿದ್ದಾನೆ.
8ನೀವು ಎಚ್ಚರವಾಗಿರಿ! ನೀವು ದುಡಿದು ಸಂಪಾದಿಸಿದ್ದನ್ನು ಕಳೆದುಕೊಳ್ಳಬೇಡಿ. ನೀವು ಎಚ್ಚರಿಕೆಯಿಂದ ಇರುವುದಾದರೆ, ನಿಮಗೆ ಬರಬೇಕಾದ ಪೂರ್ಣಫಲವನ್ನು ಹೊಂದಿಕೊಳ್ಳುವಿರಿ.

9ಕ್ರಿಸ್ತನ ಉಪದೇಶದಲ್ಲಿ ನೆಲೆಗೊಳ್ಳದೆ ಅದನ್ನು ಅತಿಕ್ರಮಿಸಿ ಮುಂದಕ್ಕೆ ಹೋಗುವವನು ದೇವರನ್ನು ಹೊಂದಿಲ್ಲ. ಆದರೆ ಆ ಉಪದೇಶದಲ್ಲಿ ನೆಲಗೊಂಡಿರುವವನು ತಂದೆಯನ್ನೂ ಮಗನನ್ನೂ ಹೊಂದಿದ್ದಾನೆ.

10ನಿಮ್ಮ ಬಳಿಗೆ ಬರುವವನು ಈ ಉಪದೇಶವನ್ನು ಹೊಂದಿಲ್ಲದಿದ್ದರೆ ಅವನನ್ನು ನಿಮ್ಮ ಮನೆಯೊಳಗೆ ಸೇರಿಸಿಕೊಳ್ಳಬೇಡಿ. ಅವನನ್ನು ಸ್ವಾಗತಿಸಬೇಡಿ.
11ನೀವು ಅವನನ್ನು ಸ್ವಾಗತಿಸಿದರೆ ಅವನ ಕೆಟ್ಟಕಾರ್ಯಕ್ಕೆ ನೀವೂ ಸಹಾಯ ಮಾಡಿದಂತಾಗುವುದು.

12ನಾನು ನಿಮಗೆ ಹೇಳಬೇಕಾದುದು ಬಹಳಷ್ಟಿದೆ. ಆದರೆ ನಾನು ಕಾಗದವನ್ನೂ ಇಂಕನ್ನೂ ಬಳಸಲಿಚ್ಛಿಸುವುದಿಲ್ಲ. ಆದರ ಬದಲು, ನಾನೇ ನಿಮ್ಮ ಬಳಿಗೆ ಬರಬೇಕೆಂದಿದ್ದೇನೆ. ಆಗ ನಾವು ಒಟ್ಟಾಗಿ ಮಾತನಾಡಬಹುದು. ಇದು ನಮಗೆ ಬಹಳ ಸಂತಸವನ್ನು ಉಂಟುಮಾಡುತ್ತದೆ.
13ದೇವರಿಂದ ಆಯ್ಕೆಗೊಂಡವಳಾದ ನಿಮ್ಮ ಸಹೋದರಿಯ ಮಕ್ಕಳು ನಿಮಗೆ ವಂದನೆ ತಿಳಿಸಿದ್ದಾರೆ.

# ಯೋಹಾನನು ಬರೆದ ಮೂರನೆ ಪತ್ರ

ಸಭಾಹಿರಿಯನು, ತಾನು ಸತ್ಯದಲ್ಲಿ ಪ್ರೀತಿಸುವ, ತನ್ನ ಪ್ರಿಯ ಸ್ನೇಹಿತನಾದ ಗಾಯನಿಗೆ ಬರೆಯುವ ಪತ್ರ.

2ನನ್ನ ಪ್ರಿಯ ಸ್ನೇಹಿತನೇ, ನಿನ್ನ ಆತ್ಮವು ಅಭಿವೃದ್ಧಿ ಹೊಂದುತ್ತಿದೆ ಎಂಬುದು ನನಗೆ ತಿಳಿದಿದೆ. ನೀನು ಸರ್ವವಿಧದಲ್ಲಿಯೂ ಅಭಿವೃದ್ಧಿ ಹೊಂದಬೇಕೆಂದು ಆರೋಗ್ಯದಿಂದಿರಬೇಕೆಂದು ನಾನು ಪ್ರಾರ್ಥಿಸುತ್ತೇನೆ. 3ಕ್ರಿಸ್ತನಲ್ಲಿ ಸಹೋದರರಾದ ಕೆಲವರು ಬಂದು, ನಿನ್ನ ಜೀವನದಲ್ಲಿರುವ ಸತ್ಯವನ್ನು ನನಗೆ ತಿಳಿಸಿದರು. ನೀನು ಸತ್ಯಮಾರ್ಗದಲ್ಲಿ ನಡೆಯುತ್ತಿರುವೆ ಎಂಬುದನ್ನು ಅವರು ನನಗೆ ಹೇಳಿದರು. ಇದು ನನಗೆ ಬಹಳ ಸಂತೋಷವನ್ನು ಉಂಟುಮಾಡಿತು. 4ನನ್ನ ಮಕ್ಕಳು ಸತ್ಯಮಾರ್ಗದಲ್ಲಿ ನಡೆಯುತ್ತಿದ್ದಾರೆ ಎಂಬುದನ್ನು ಕೇಳುವಾಗಲೆಲ್ಲಾ ನನಗೆ ಬಹಳ ಸಂತೋಷವಾಗುತ್ತದೆ.

5ನನ್ನ ಪ್ರಿಯ ಸ್ನೇಹಿತನೇ, ಕ್ರಿಸ್ತನಲ್ಲಿ ಸಹೋದರರಾದವರಿಗೆ ನೀನು ಸಹಾಯ ಮಾಡುತ್ತಿರುವುದು ಒಳ್ಳೆಯದೇ ಸರಿ. ನಿನಗೆ ಗೊತ್ತಿಲ್ಲದ ಸಹೋದರರಿಗೂ ನೀನು ಸಹಾಯ ಮಾಡುತ್ತಿರುವೆ! 6ನಿನಗಿರುವ ಪ್ರೀತಿಯನ್ನು ಕುರಿತು ಈ ಸಹೋದರರು ಸಭೆಗೆ ತಿಳಿಸಿದರು. ಅವರು ತಮ್ಮ ಪ್ರವಾಸವನ್ನು ಮುಂದುವರಿಸಲು ದಯವಿಟ್ಟು ಅವರಿಗೆ ಸಹಾಯ ಮಾಡು. ದೇವರಿಗೆ ಮೆಚ್ಚಿಗೆಕರವಾದ ರೀತಿಯಲ್ಲಿ ಅವರಿಗೆ ಸಹಾಯಮಾಡು. 7ಈ ಸಹೋದರರು ಕ್ರಿಸ್ತನ ಸೇವೆಗಾಗಿ ಪ್ರವಾಸಹೊರಟಿದ್ದಾರೆ. ಅವಿಶ್ವಾಸಿಗಳಿಂದ ಅವರು ಯಾವ ಸಹಾಯವನ್ನೂ ತೆಗೆದುಕೊಳ್ಳಲಿಲ್ಲ. 8ಆದ್ದರಿಂದ ನಾವು ಈ ಸಹೋದರರಿಗೆ ಸಹಾಯಮಾಡಬೇಕು. ನಾವು ಅವರಿಗೆ ಸಹಾಯಮಾಡಿದಾಗ, ಸತ್ಯಕ್ಕೋಸ್ಕರ ಅವರು ಮಾಡುವ ಕಾರ್ಯದಲ್ಲಿ ನಾವೂ ಪಾಲುಗಾರರಾಗುತ್ತೇವೆ.

9ನಾನು ಸಭೆಗೆ ಒಂದು ಪತ್ರವನ್ನು ಬರೆದೆನು. ಆದರೆ ನಾವು ಹೇಳಿದುದನ್ನು ದಿಯೊತ್ರೇಫನು ಕೇಳುವುದಿಲ್ಲ. ಅವನು ತಾನೇ ಅವರ ನಾಯಕನಾಗಿರಬೇಕೆಂದು ಯಾವಾಗಲೂ ಇಚ್ಛಿಸುತ್ತಾನೆ. 10ನಾನು ಬಂದಾಗ, ದಿಯೊತ್ರೇಫನು ಮಾಡುತ್ತಿರುವುದರ ಬಗ್ಗೆ ತಿಳಿಸುತ್ತೇನೆ. ಅವನು ನಮ್ಮನ್ನು ಕುರಿತು ಸುಳ್ಳನ್ನೂ ಕೆಟ್ಟ ಸಂಗತಿಗಳನ್ನೂ ಹೇಳುತ್ತಾನೆ. ಆದರೆ ಅಷ್ಟೇ ಅಲ್ಲ! ಕ್ರಿಸ್ತನ ಸೇವೆಮಾಡುತ್ತಿರುವ ಆ ಸಹೋದರರಿಗೆ ಸಹಾಯಮಾಡಲು ಅವನು ಒಪ್ಪುವುದಿಲ್ಲ. ಅಲ್ಲದೆ ಆ ಸಹೋದರರಿಗೆ ಸಹಾಯಮಾಡಲಿಚ್ಛಿಸುವ ಜನರನ್ನೂ ಅವನು ತಡೆಯುತ್ತಾನೆ. ಆ ಜನರು ಸಭೆಯನ್ನು ಬಿಟ್ಟುಹೋಗುವಂತೆ ಅವನು ಮಾಡುತ್ತಾನೆ.

11ನನ್ನ ಪ್ರಿಯ ಸ್ನೇಹಿತನೇ, ಕೆಟ್ಟದ್ದನ್ನು ಅನುಸರಿಸಬೇಡ, ಒಳ್ಳೆಯದನ್ನೇ ಅನುಸರಿಸು, ಒಳ್ಳೆಯದನ್ನು ಮಾಡುವವನು ದೇವರಿಗೆ ಸೇರಿದವನಾಗಿದ್ದಾನೆ. ಆದರೆ ಕೆಟ್ಟದ್ದನ್ನು ಮಾಡುವವನು ದೇವರನ್ನು ಎಂದೂ ತಿಳಿಯದವನಾಗಿದ್ದಾನೆ.

12ದೇಮೇತ್ರಿಯನ ಬಗ್ಗೆ ಜನರೆಲ್ಲರೂ ಒಳ್ಳೆಯ ಸಂಗತಿಗಳನ್ನು ಹೇಳುತ್ತಾರೆ. ಅವರು ಹೇಳುವುದನ್ನು ಸತ್ಯವೂ ಅಂಗೀಕರಿಸುತ್ತದೆ. ಅವನನ್ನು ಕುರಿತು ನಾವೂ ಸಹ ಒಳ್ಳೆಯದನ್ನು ಹೇಳುತ್ತೇವೆ. ನಾವು ಹೇಳುವುದು ನಿಜವೆಂಬುದು ನಿನಗೆ ತಿಳಿದಿದೆ.

13ನಾನು ನಿನಗೆ ಹೇಳಲಿಚ್ಛಿಸುವ ಅನೇಕ ವಿಚಾರಗಳಿವೆ. ಆದರೆ ನಾನು ಕಾಗದವನ್ನೂ ಇಂಕನ್ನೂ ಬಳಸಲು ಇಚ್ಛಿಸುವುದಿಲ್ಲ. 14ನಾನು ನಿನ್ನನ್ನು ನೋಡಲು ಬರಬೇಕೆಂದಿದ್ದೇನೆ. ಆಗ ನಾವಿಬ್ಬರೂ ಒಟ್ಟಿಗೆ ಮಾತನಾಡಬಹುದು. 15ನಿನಗೆ ಶಾಂತಿಯಿರಲಿ. ಸ್ನೇಹಿತರು ನಿನಗೆ ವಂದನೆ ತಿಳಿಸಿದ್ದಾರೆ. ಅಲ್ಲಿರುವ ಸ್ನೇಹಿತರಿಗೆಲ್ಲ ದಯವಿಟ್ಟು ನಮ್ಮ ವಂದನೆಯನ್ನು ತಿಳಿಸು.

# ಯೂದನು ಬರೆದ ಪತ್ರ

ಯೇಸು ಕ್ರಿಸ್ತನ ಸೇವಕನೂ ಯಾಕೋಬನ ಸಹೋದರನೂ
ಆಗಿರುವ ಯೂದನು ದೇವರಿಂದ ಕರೆಯಲ್ಪಟ್ಟ ಜನರೆಲ್ಲರಿಗೂ
ಬರೆಯುವ ಪತ್ರ. ತಂದೆಯಾದ ದೇವರು ನಿಮ್ಮನ್ನು ಪ್ರೀತಿಸು
ತ್ತಾನೆ. ಮತ್ತು ನಿಮ್ಮನ್ನು ಯೇಸು ಕ್ರಿಸ್ತನಿಗಾಗಿ ಸುರಕ್ಷಿತ
ವಾಗಿಟ್ಟಿದ್ದಾನೆ.
2 ನಿಮಗೆ ಕರುಣೆ, ಶಾಂತಿ ಮತ್ತು ಪ್ರೀತಿ ಹೆಚ್ಚಾಗಲಿ.

### ತಪ್ಪು ಮಾಡಿದ ಜನರನ್ನು ದೇವರು ದಂಡಿಸುತ್ತಾನೆ

3 ಪ್ರಿಯ ಸ್ನೇಹಿತರೇ, ನಾವೆಲ್ಲರೂ ಹಂಚಿಕೊಳ್ಳುವ ರಕ್ಷಣೆ
ಯನ್ನು ಕುರಿತು ನಿಮಗೆ ಬರೆಯಬೇಕೆಂದು ನಾನು ಬಹಳವಾಗಿ
ಇಚ್ಛಿಸಿದ್ದೆನು. ಆದರೆ ಮತ್ತೊಂದು ವಿಷಯದ ಬಗ್ಗೆ ನಾನು ನಿಮಗೆ
ಬರೆಯುವುದು ಅಗತ್ಯವೆನಿಸಿತು. ದೇವರು ತನ್ನ ಪರಿಶುದ್ಧ
ಜನರಿಗೆ ದಯಪಾಲಿಸಿರುವ ನಂಬಿಕೆಗಾಗಿ ನೀವು ಪ್ರಯಾಸ
ಪಟ್ಟು ಹೋರಾಡುವಂತೆ ನಾನು ನಿಮ್ಮನ್ನು ಪ್ರೋತ್ಸಾಹಿಸಲು
ಇಚ್ಛಿಸುತ್ತೇನೆ. ದೇವರು ನಮಗೆ ಈ ನಂಬಿಕೆಯನ್ನು ಒಂದೇ ಸಲ
ದಯಪಾಲಿಸಿದನು. ಅದು ಸರ್ವಕಾಲಗಳಲ್ಲಿಯೂ ಒಳ್ಳೆಯ
ದಾಗಿದೆ. 4 ಕೆಲವು ಜನರು ರಹಸ್ಯವಾಗಿ ನಿಮ್ಮ ಸಭೆಯಲ್ಲಿ
ಪ್ರವೇಶಿಸಿದ್ದಾರೆ. ಇವರಿಗಾಗುವ ದಂಡನೆಯ ಕುರಿತು ಬಹು
ಕಾಲದ ಹಿಂದೆಯೇ ಪ್ರವಾದಿಗಳು ಬರೆದಿದ್ದಾರೆ. ಈ ಜನರು
ದೇವರಿಗೆ ವಿರುದ್ಧವಾಗಿದ್ದಾರೆ. ಅವರು ಪಾಪಕಾರ್ಯಗಳನ್ನು
ಮಾಡುವುದಕ್ಕಾಗಿ ನಮ್ಮ ದೇವರ ಕೃಪೆಯನ್ನು ಉಪಯೋಗಿಸಿ
ಕೊಂಡು ನಮ್ಮ ಒಬ್ಬನೇ ಒಡೆಯನಾದ ಮತ್ತು ಪ್ರಭುವಾದ
ಯೇಸು ಕ್ರಿಸ್ತನನ್ನು ಸ್ವೀಕರಿಸಿಕೊಳ್ಳುವುದಿಲ್ಲ.
5 ನೀವು ಈಗಾಗಲೇ ತಿಳಿದುಕೊಂಡಿರುವ ಕೆಲವು ವಿಚಾರ
ಗಳನ್ನು ನೆನಪುಮಾಡಿಕೊಳ್ಳಲು ನಾನು ನಿಮಗೆ ಸಹಾಯ ಮಾಡ
ಲಿಚ್ಛಿಸುತ್ತೇನೆ. ಪ್ರಭು ತನ್ನ ಜನರನ್ನು ಈಜಿಪ್ಟ್ ದೇಶದಿಂದ
ಹೊರಗೆ ತಂದು ಅವರನ್ನು ರಕ್ಷಿಸಿದನೆಂಬುದನ್ನು ನೆನಪು ಮಾಡಿ
ಕೊಳ್ಳಿರಿ. ತರುವಾಯ ಪ್ರಭುವು ನಂಬಿಕೆಯಿಲ್ಲದ ಜನರೆಲ್ಲ
ರನ್ನೂ ನಾಶಪಡಿಸಿದನು. 6 ದೇವದೂತರು ಅಧಿಕಾರವನ್ನು
ಹೊಂದಿದ್ದರೂ ಅದನ್ನು ಉಳಿಸಿಕೊಳ್ಳಲಾರದೆ ಸ್ವಂತ ವಾಸಸ್ಥಾನ
ವನ್ನು ಬಿಟ್ಟುಹೋದದ್ದನ್ನು ನೆನಸಿಕೊಳ್ಳಿರಿ. ಆದ್ದರಿಂದ ಪ್ರಭುವು
ಈ ದೇವದೂತರನ್ನು ಅಂಧಕಾರದಲ್ಲಿಟ್ಟನು. ಅವರನ್ನು ಶಾಶ್ವತ
ವಾದ ಬೇಡಿಗಳಿಂದ ಬಂಧಿಸಲಾಯಿತು. ಮಹಾದಿನದಂದು
ಅವರಿಗೆ ತೀರ್ಪು ನೀಡುವುದಕ್ಕಾಗಿ ಆತನು ಅವರನ್ನು ಅಲ್ಲಿ
ಟ್ಟಿದ್ದಾನೆ. 7 ಸೊದೋಮ್ ಮತ್ತು ಗೊಮೋರ ನಗರಗಳನ್ನೂ
ಅವುಗಳ ಸುತ್ತಲಿನ ಪಟ್ಟಣಗಳನ್ನೂ ನೆನಪು ಮಾಡಿಕೊಳ್ಳಿರಿ.
ಅವುಗಳೂ ಆ ದೇವದೂತರಂತಾದವು. ಆ ಪಟ್ಟಣಗಳಲ್ಲಿ ಲೈಂಗಿಕ
ಪಾಪಗಳು ಮತ್ತು ಕೆಟ್ಟಕಾರ್ಯಗಳು ತುಂಬಿಕೊಂಡಿದ್ದವು.
ಅವರು ನಿತ್ಯವಾದ ಬೆಂಕಿಯ ದಂಡನೆಯಿಂದ ಸಂಕಟಪಡು
ವರು. ಅವರಿಗೆ ನೀಡಿದ ದಂಡನೆಯು ನಮಗೊಂದು ದೃಷ್ಟಾಂತ
ವಾಗಿದೆ.
8 ನಿಮ್ಮ ಸಭೆಯಲ್ಲಿ ಪ್ರವೇಶಿಸಿರುವ ಜನರಿಗೂ ಇದೇ
ರೀತಿಯಾಗುವುದು. ಅವರ ಕನಸುಗಳೇ ಅವರಿಗೆ ಮಾರ್ಗದರ್ಶಿ
ಯಾಗಿವೆ. ಅವರು ಪಾಪಗಳಿಂದಲೇ ತಮ್ಮನ್ನು ಮಲಿನ ಮಾಡಿ
ಕೊಳ್ಳುತ್ತಾರೆ. ಅವರು ಪ್ರಭುವಿನ ಅಧಿಕಾರವನ್ನು ತಿರಸ್ಕರಿಸು
ತ್ತಾರೆ; ಪ್ರಭಾವದಿಂದ ಕೂಡಿದ ದೇವದೂತರ ವಿರುದ್ಧ
ಕೆಟ್ಟದ್ದನ್ನು ಹೇಳುತ್ತಾರೆ. 9 ಪ್ರಧಾನ ದೇವದೂತನಾದ ಮಿಕಾ
ಯೇಲನೂ ಸಹ ಹೀಗೆ ಮಾಡಲಿಲ್ಲ. ಮೋಶೆಯ ದೇಹವು
ಯಾರಿಗೆ ಸೇರಬೇಕೆಂಬುದರ ಬಗ್ಗೆ ಮಿಕಾಯೇಲನು ಸೈತಾನನ
ಬಗ್ಗೆ ದೂಷಣೆ ಮಾಡಲು ಧೈರ್ಯಗೊಳ್ಳದೆ, ‘‘ಪ್ರಭುವು ನಿನ್ನನ್ನು
ದಂಡಿಸುತ್ತಾನೆ’’ ಎಂದು ಹೇಳಿದನು. 10 ಆದರೆ ಈ ಜನರು
ತಮಗೆ ಅರ್ಥವಾಗದ್ದನ್ನೂ ಟೀಕಿಸುತ್ತಾರೆ. ಅವರಿಗೂ ಸ್ವಲ್ಪ
ಅರ್ಥವಾಗುತ್ತದೆ. ಆದರೆ ಅವರು ವಿವೇಕಶೂನ್ಯ ಪ್ರಾಣಿಗಳಂತೆ
ಸಹಜ ಪ್ರವೃತ್ತಿಯಿಂದ ಅವುಗಳನ್ನು ಅರ್ಥಮಾಡಿಕೊಳ್ಳು
ತ್ತಾರೆಯೇ ಹೊರತು ವಿವೇಚನೆಯಿಂದ ಅರ್ಥಮಾಡಿಕೊಳ್ಳು
ವುದಿಲ್ಲ. ಇವುಗಳೇ ಅವರನ್ನು ನಾಶ ಮಾಡುತ್ತವೆ.
11 ಅವರಿಗೆ ದುರ್ಗತಿಯಾಗುವುದು. ಈ ಜನರು ಕಾಯಿನನ
ಮಾರ್ಗವನ್ನು ಅನುಸರಿಸುತ್ತಾರೆ. ಇವರು ದ್ರವ್ಯಸಂಪಾದನೆ
ಗಾಗಿ, ಬಿಳಾಮನ ತಪ್ಪುಮಾರ್ಗದಲ್ಲಿ ನಡೆಯಲು ತಮ್ಮನ್ನೇ
ಒಪ್ಪಿಸಿಕೊಟ್ಟಿದ್ದಾರೆ. ಕೋರಹನು ಮಾಡಿದಂತೆ ಈ ಜನರೂ
ದೇವರ ವಿರುದ್ಧವಾಗಿ ಹೋರಾಡುತ್ತಿದ್ದಾರೆ. ಅವರು ಕೋರಹ
ನಂತೆ ನಾಶವಾಗುತ್ತಾರೆ. 12 ನಿಮ್ಮ ಅನ್ಯೋನ್ಯತೆಯ ಭೋಜನ
ದಲ್ಲಿ ಈ ಜನರು ಮುಳುಗಿಹೋದ ಬಂಡೆಗಳಂತಿದ್ದಾರೆ. ಅವರು
ಭಯವಿಲ್ಲದೆ ನಿಮ್ಮ ಜೊತೆಯಲ್ಲಿ ತಿನ್ನುತ್ತಾರೆ. ಅವರು ತಮ್ಮ
ಬಗ್ಗೆ ಮಾತ್ರ ಚಿಂತಿಸುವ ಕುರುಬರಾಗಿದ್ದಾರೆ. ಅವರು ನೀರಿಲ್ಲದ
ಮೋಡಗಳಂತಿದ್ದಾರೆ. ಗಾಳಿಯು ಆ ಮೋಡಗಳನ್ನು ಬಡಿದು
ಕೊಂಡು ಹೋಗುವುದು. ಅವರು ಕಾಲಕ್ಕೆ ತಕ್ಕಂತೆ ಫಲಬಿಡದೆ
ಮತ್ತು ಬೇರುಸಹಿತ ಕಿತ್ತುಬಂದು ಉರುಳಿಹೋದ ಮರಗಳಂತಿ
ದ್ದಾರೆ.
13 ಇವರು ಸಮುದ್ರದಲ್ಲಿನ ಭೀಕರವಾದ ಅಲೆಗಳಂತಿದ್ದಾರೆ.
ಈ ಅಲೆಗಳು ನೊರೆಯನ್ನು ಕಾರುವಂತೆ ಇವರು ನಾಚಿಕೆ
ಯಿಲ್ಲದ ಕೆಲಸಗಳನ್ನು ಮಾಡುತ್ತಾರೆ. ಈ ಜನರು ಆಕಾಶದಲ್ಲಿ
ಅಲೆಯುವ ನಕ್ಷತ್ರಗಳಂತಿದ್ದಾರೆ. ಇವರಿಗಾಗಿ ಶಾಶ್ವತವಾದ
ಕಾರ್ಗತ್ತಲಿನ ಸ್ಥಳವನ್ನು ಕಾದಿರಿಸಲಾಗಿದೆ.
14 ಆದಾಮನ ಏಳನೆಯ ತಲೆಮಾರಿನವನಾದ ಹನೋಕನು
ಈ ಜನರನ್ನು ಕುರಿತು ಹೀಗೆ ಹೇಳಿದ್ದಾನೆ: ‘‘ಇಗೋ, ಪ್ರಭುವು

ತನ್ನ ಲಕ್ಷಾಂತರ ಪರಿಶುದ್ಧ ದೂತರೊಂದಿಗೆ ಬರುತ್ತಿದ್ದಾನೆ.
[15]ಪ್ರಭುವು ಪ್ರತಿಯೊಬ್ಬರಿಗೂ ನ್ಯಾಯತೀರಿಸುತ್ತಾನೆ. ಭಕ್ತಿ
ಹೀನರು ತನಗೆ ವಿರುದ್ಧವಾಗಿ ಮಾಡಿದ ಎಲ್ಲಾ ದುಷ್ಕೃತ್ಯಗಳನ್ನು
ಮತ್ತು ಪಾಪಿಷ್ಠರು ತನಗೆ ವಿರುದ್ಧವಾಗಿ ಆಡಿದ ಎಲ್ಲಾ
ದೂಷಣೆಗಳನ್ನು ಖಂಡಿಸಲು ಆತನು ಬರುತ್ತಾನೆ.''

[16]ಈ ದುರ್ಬೋಧಕರಾದರೊ ಗುಣಗುಟ್ಟುವವರು, ತಪ್ಪು
ಹುಡುಕುವವರು, ದುರಾಶೆಗಳಿಗೆ ಬಲಿಯಾದವರು, ಬಡಾಯಿ
ಕೊಚ್ಚುವವರು, ಸ್ವಪ್ರಯೋಜನಕ್ಕಾಗಿ ಮುಖಸ್ತುತಿ ಮಾಡು
ವವರು.

### ಎಚ್ಚರಿಕೆ ಮತ್ತು ಮಾಡಬೇಕಾದ ಕಾರ್ಯಗಳು

ಪ್ರಿಯ ಸ್ನೇಹಿತರೇ, ನಮ್ಮ ಪ್ರಭುವಾದ ಯೇಸು ಕ್ರಿಸ್ತನ
ಅಪೊಸ್ತಲರು ಮುಂಚೆ ಏನು ಹೇಳಿದರೆಂಬುದನ್ನು ನೆನಪು
ಮಾಡಿಕೊಳ್ಳಿ. [18]ಅಪೊಸ್ತಲರು ನಿಮಗೆ, ''ಅಂತ್ಯಕಾಲದಲ್ಲಿ
ದೇವರನ್ನು ಕುರಿತು ನಗುವ ಜನರಿರುತ್ತಾರೆ'' ಎಂದು ಹೇಳಿ
ದರು. ಈ ಜನರು ತಮ್ಮ ಇಚ್ಛೆಗನುಸಾರವಾದ ಮತ್ತು ದೇವರಿಗೆ
ವಿರುದ್ಧವಾದವುಗಳನ್ನು ಮಾತ್ರ ಮಾಡುತ್ತಿದ್ದರು. [19]ಈ ಜನರು
ನಿಮ್ಮಲ್ಲಿ ಭೇದವನ್ನು ಹುಟ್ಟಿಸುತ್ತಾರೆ. ಈ ಜನರು ತಮ್ಮ ಪಾಪ
ಸ್ವಭಾವದ ಅಪೇಕ್ಷೆಯಂತೆ ಮಾತ್ರ ಮಾಡುತ್ತಾರೆ. ಅವರಲ್ಲಿ
ಪವಿತ್ರಾತ್ಮನಿಲ್ಲ.

[20]ಆದರೆ ಪ್ರಿಯ ಸ್ನೇಹಿತರೇ, ನೀವು ನಿಮ್ಮ ಅತಿ ಪರಿಶುದ್ಧ
ನಂಬಿಕೆಯ ಮೂಲಕ ದೃಢವಾಗಿರಿ. ಪವಿತ್ರಾತ್ಮಭರಿತರಾಗಿ
ಪ್ರಾರ್ಥಿಸಿರಿ. [21]ದೇವರ ಪ್ರೀತಿಯಲ್ಲಿ ನೆಲೆಗೊಂಡಿರಿ. ನಿತ್ಯ
ಜೀವವನ್ನು ಹೊಂದಿಕೊಳ್ಳುವುದಕ್ಕಾಗಿ ಪ್ರಭುವಾದ ಯೇಸು
ಕ್ರಿಸ್ತನ ಕರುಣೆಯನ್ನೇ ಎದುರು ನೋಡುತ್ತಿರಿ.

[22]ಸಂದೇಹವಿರುವ ಜನರಿಗೆ ಕರುಣೆ ತೋರಿ. [23]ಇತರ
ಜನರನ್ನು ರಕ್ಷಿಸಿ. ಆ ಜನರನ್ನು ಬೆಂಕಿಯಿಂದ ಹೊರಕ್ಕೆ ತನ್ನಿರಿ.
ನೀವು ಕೆಲವು ಜನರಿಗೆ ಕರುಣೆತೋರುವಾಗ ಎಚ್ಚರದಿಂದಿರಿ.
ಅವರ ಪಾಪಗಳಿಂದ ಹೊಲಸಾಗಿರುವವರ ಬಟ್ಟೆಗಳನ್ನು ಸಹ
ದ್ವೇಷಿಸಿರಿ.

### ದೇವರಿಗೆ ಸ್ತೋತ್ರ ಮಾಡಿರಿ

[24]ಆತನು (ದೇವರು) ಬಲಶಾಲಿಯಾಗಿದ್ದಾನೆ. ನೀವು
ಬೀಳದಂತೆ ಆತನು ನಿಮಗೆ ಸಹಾಯ ಮಾಡಬಲ್ಲನು. ಆತನು
ನಿಮ್ಮಲ್ಲಿ ಯಾವ ತಪ್ಪೂ ಇಲ್ಲದಂತೆ ಮಾಡಿ, ತನ್ನ ಮಹಿಮಾ
ಸನ್ನಿಧಿಗೆ ತರುವುದಕ್ಕೂ ನಿಮಗೆ ಮಹಾಸಂತೋಷವನ್ನು
ಕೊಡುವುದಕ್ಕೂ ಶಕ್ತನಾಗಿದ್ದಾನೆ. [25]ಆತನೊಬ್ಬನೇ ದೇವರು.
ನಮ್ಮನ್ನು ರಕ್ಷಿಸುವಾತನು ಆತನೊಬ್ಬನೇ. ಆದಿಯಿಂದ
ಇದ್ದಹಾಗೆ ಈಗಲೂ ಯಾವಾಗಲೂ ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಮೂಲಕ ಆತನಿಗೆ ಪ್ರಭಾವ, ಮಹತ್ವ, ಅಧಿಪತ್ಯ ಮತ್ತು
ಅಧಿಕಾರಗಳು ಇರಲಿ. ಆಮೆನ್.

# ಯೋಹಾನನು ಬರೆದ ಪ್ರಕಟನೆ

### ಪೀಠಿಕೆ

1 ಇದು ಯೇಸು ಕ್ರಿಸ್ತನ ಪ್ರಕಟನೆ. ದೇವರು ಬೇಗನೆ ಸಂಭವಿಸಲಿರುವುದನ್ನು ತನ್ನ ಸೇವಕರಿಗೆ ತೋರ್ಪಡಿಸುವುದಕ್ಕಾಗಿ ಯೇಸುವಿಗೆ ಇವುಗಳನ್ನು ಪ್ರಕಟಿಸಿದನು. ಕ್ರಿಸ್ತನು ತನ್ನ ಸೇವಕನಾದ ಯೋಹಾನನಿಗೆ ಇವುಗಳನ್ನು ತೋರಿಸಲು ತನ್ನ ದೂತನನ್ನು ಕಳುಹಿಸಿದನು. 2ಯೋಹಾನನು ತಾನು ಕಂಡದ್ದೆಲ್ಲವನ್ನು ತಿಳಿಸಿದನು. ಇದು ಯೇಸು ಕ್ರಿಸ್ತನು ಅವನಿಗೆ ಹೇಳಿದ ಸತ್ಯ. ಇದು ದೇವರಿಂದ ಬಂದ ಸಂದೇಶ. 3ದೇವರಿಂದ ಬಂದ ಈ ಸಂದೇಶದ ವಾಕ್ಯಗಳನ್ನು ಓದುವವರೂ ಈ ಸಂದೇಶವನ್ನು ಕೇಳಿ ಅದನ್ನು ಕೈಕೊಂಡು ನಡೆಯುವವರೂ ಭಾಗ್ಯವಂತರಾಗಿದ್ದಾರೆ. ಏಕೆಂದರೆ ನೆರವೇರುವ ಕಾಲವು ಸಮೀಪವಾಗಿದೆ.

### ಯೋಹಾನನು ಸಭೆಗಳಿಗೆ ಬರೆದ ಯೇಸುವಿನ ಸಂದೇಶ

4ಏಷ್ಯಾ* ಪ್ರದೇಶದಲ್ಲಿರುವ ಏಳು ಸಭೆಗಳಿಗೆ ಯೋಹಾನನು ಬರೆಯುವುದೇನಂದರೆ: ವರ್ತಮಾನ, ಭೂತ, ಭವಿಷ್ಯತ್ಕಾಲಗಳಲ್ಲಿರುವಾತನಿಂದ ಮತ್ತು ಆತನ ಸಿಂಹಾಸನದ ಮುಂದಿರುವ ಏಳು ಆತ್ಮಗಳಿಂದ ಮತ್ತು 5ಯೇಸು ಕ್ರಿಸ್ತನಿಂದ ನಿಮಗೆ ಕೃಪೆಯೂ ಶಾಂತಿಯೂ ಲಭಿಸಲಿ. ಯೇಸು ನಂಬಿಗಸ್ತ ಸಾಕ್ಷಿಯಾಗಿದ್ದಾನೆ. ಸತ್ತವರೊಳಗಿಂದ ಮೇಲೆದ್ದು ಬಂದವರಲ್ಲಿ ಆತನೇ ಮೊದಲಿಗನಾಗಿದ್ದಾನೆ. ಆತನು ಲೋಕದ ರಾಜರುಗಳಿಗೆ ಅಧಿಪತಿಯಾಗಿದ್ದಾನೆ. ಯೇಸು ನಮ್ಮನ್ನು ಪ್ರೀತಿಸುತ್ತಾನೆ. ಆತನು ತನ್ನ ರಕ್ತದಿಂದ (ಮರಣ) ನಮ್ಮ ಪಾಪಗಳನ್ನು ನಿವಾರಿಸಿ ಬಿಡುಗಡೆ ಗೊಳಿಸಿದನು; 6ನಮ್ಮನ್ನು ಒಂದು ರಾಜ್ಯವನ್ನಾಗಿ ಮಾಡಿ ನಮ್ಮನ್ನು ತನ್ನ ತಂದೆಯಾದ ದೇವರ ಸೇವೆ ಮಾಡುವ ಯಾಜಕರನ್ನಾಗಿ ಮಾಡಿದನು. ಯೇಸುವಿಗೆ ಎಂದೆಂದಿಗೂ ಮಹಿಮೆ ಪ್ರಭಾವಗಳಿರಲಿ! ಆಮೆನ್.

7ಇಗೋ, ಯೇಸು ಮೋಡಗಳ ಸಂಗಡ ಬರುತ್ತಿದ್ದಾನೆ. ಪ್ರತಿಯೊಬ್ಬರು ಆತನನ್ನು ನೋಡುವರು, ಆತನನ್ನು ಇರಿದವರೂ* ಸಹ ನೋಡುವರು. ಆತನನ್ನು ಕಂಡು ಲೋಕದ ಜನರೆಲ್ಲರೂ ಎದೆಬಡಿದುಕೊಂಡು ಗೋಳಾಡುವರು. ಹೌದು, ಇದು ಸಂಭವಿಸುತ್ತದೆ! ಆಮೆನ್. 8ಪ್ರಭುವಾದ ದೇವರು ಹೇಳುವುದೇನಂದರೆ: ‘‘ನಾನೇ ಆದಿಯೂ ಅಂತ್ಯವೂ* ಆಗಿದ್ದೇನೆ. ನಾನು ವರ್ತಮಾನ, ಭೂತ ಮತ್ತು ಭವಿಷ್ಯತ್ ಕಾಲಗಳಲ್ಲಿರುವಾತನು. ನಾನೇ ಸರ್ವಶಕ್ತನು.’’

9ಯೋಹಾನನೆಂಬ ನಾನು ಕ್ರಿಸ್ತನಲ್ಲಿ ನಿಮ್ಮ ಸಹೋದರನಾಗಿದ್ದೇನೆ. ನಾವೆಲ್ಲರೂ ಒಟ್ಟಾಗಿ ಯೇಸುವಿನ ನಿಮಿತ್ತ ಸಂಕಟಗಳಲ್ಲಿಯೂ ರಾಜ್ಯದಲ್ಲಿಯೂ ತಾಳ್ಮೆಯಲ್ಲಿಯೂ ಪಾಲುಗಾರರಾಗಿದ್ದೇವೆ. ನಾನು ದೇವರ ಸಂದೇಶಕ್ಕೂ ಯೇಸುವಿನ ಸತ್ಯಕ್ಕೂ ನಂಬಿಗಸ್ತನಾಗಿದ್ದುದರಿಂದ ಪತ್ಮೊಸ್ ದ್ವೀಪದಲ್ಲಿದ್ದೆನು. 10ಪ್ರಭುವಿನ ದಿನದಂದು ಪವಿತ್ರಾತ್ಮನು ನನ್ನನ್ನು ವಶಪಡಿಸಿಕೊಂಡನು. ಆಗ ನನ್ನ ಹಿಂಭಾಗದಲ್ಲಿ ಒಂದು ಮಹಾ ಶಬ್ದವನ್ನು ಕೇಳಿದೆನು. ಆ ಶಬ್ದವು ತುತ್ತೂರಿಯ ಧ್ವನಿಯಂತಿತ್ತು. 11ಆ ಧ್ವನಿಯು, ‘‘ನೀನು ನೋಡುವುದನ್ನೆಲ್ಲ ಒಂದು ಪುಸ್ತಕದಲ್ಲಿ ಬರೆದು ಎಫೆಸ, ಸ್ಮುರ್ನ, ಥುವತ್ತೈರ, ಪೆರ್ಗಮ, ಸಾರ್ದಿಸ್, ಫಿಲದೆಲ್ಫಿಯ ಮತ್ತು ಲವೊದಿಕೀಯ ಎಂಬ ಏಳು ಸಭೆಗಳಿಗೆ ಕಳುಹಿಸು’’ ಎಂದು ಹೇಳಿತು.

12ನನ್ನ ಜೊತೆಯಲ್ಲಿ ಯಾರು ಮಾತನಾಡುತ್ತಿದ್ದಾರೆಂದು ನೋಡಲು ನಾನು ಹಿಂದಕ್ಕೆ ತಿರುಗಿದಾಗ, ಏಳು ಬಂಗಾರದ ದೀಪಸ್ತಂಭಗಳನ್ನು ಕಂಡೆನು. 13ಆ ದೀಪಸ್ತಂಭಗಳ ಮಧ್ಯದಲ್ಲಿ ‘‘ಮನುಷ್ಯಕುಮಾರ’’ನಂತೆ* ಇರುವಾತನನ್ನು ನಾನು ನೋಡಿದೆನು. ಆತನು ಉದ್ದನೆಯ ನಿಲುವಂಗಿಯನ್ನು ಧರಿಸಿದ್ದನು; ಚಿನ್ನದ ಪಟ್ಟಿಯನ್ನು ಎದೆಗೆ ಕಟ್ಟಿಕೊಂಡಿದ್ದನು. 14ಆತನ ತಲೆಗೂದಲು ಮಂಜಿನಂತೆಯೂ ಉಣ್ಣೆಯಂತೆಯೂ ಬೆಳ್ಳಗಿದ್ದವು; ಕಣ್ಣುಗಳು ಬೆಂಕಿಯ ಜ್ವಾಲೆಯಂತಿದ್ದವು; 15ಪಾದಗಳು ಕುಲುಮೆಯಲ್ಲಿ ಕಾಯಿಸಿದ ತಾಮ್ರದಂತಿದ್ದವು; ಧ್ವನಿಯು ಹರಿಯುವ ನೀರಿನ ಘೋಷದಂತಿತ್ತು. 16ಆತನು ತನ್ನ ಬಲಗೈಯಲ್ಲಿ ಏಳು ನಕ್ಷತ್ರಗಳನ್ನು ಹಿಡಿದುಕೊಂಡಿದ್ದನು. ಆತನ ಬಾಯೊಳಗಿನಿಂದ ಹರಿತವಾದ ಇಬ್ಬಾಯಿ ಖಡ್ಗವು ಹೊರಬರುತ್ತಿತ್ತು. ಆತನ ಮುಖವು ಮಧ್ಯಾಹ್ನದಲ್ಲಿ ಪ್ರಕಾಶಿಸುವ ಸೂರ್ಯನಂತಿತ್ತು. 17ನಾನು ಆತನನ್ನು ನೋಡಿದಾಗ, ಆತನ ಪಾದಗಳ ಬಳಿ ಸತ್ತವನಂತೆ ಕುಸಿದುಬಿದ್ದೆನು. ಆತನು ತನ್ನ ಬಲಗೈಯನ್ನು ನನ್ನ ಮೇಲಿಟ್ಟು, ‘‘ಹೆದರಬೇಡ! ನಾನೇ ಆದಿ ಮತ್ತು ಅಂತ್ಯ. 18ನಾನೇ ಜೀವಿಸುವಾತನು. ನಾನು ಸತ್ತೆನು, ಆದರೆ ಇಗೋ ನೋಡು, ನಾನು ಯುಗಯುಗಾಂತರಗಳಲ್ಲಿಯೂ ಜೀವಿಸುವವನಾಗಿದ್ದೇನೆ. ಮರಣದ ಮತ್ತು ಪಾತಾಳದ ಬೀಗದ ಕೈಗಳು ನನ್ನಲ್ಲಿವೆ. 19ಆದ್ದರಿಂದ ನೀನು ನೋಡಿದ ಸಂಗತಿಗಳನ್ನು ಬರೆ. ಈಗ ಸಂಭವಿಸುವ ಸಂಗತಿಗಳನ್ನು ಮತ್ತು ಮುಂದೆ ಸಂಭವಿಸಬೇಕಾದ ಸಂಗತಿಗಳನ್ನು ಬರೆ. 20ನನ್ನ ಬಲಗೈಯಲ್ಲಿ ನೀನು ನೋಡಿದ

---

**ಏಷ್ಯಾ** ಏಷ್ಯಾ ಮೈನರ್‌ನ ಪಶ್ಚಿಮ ಪ್ರಾಂತ್ಯ (ಇಂದಿನ ಟರ್ಕಿ).

**ಆತನನ್ನು ಇರಿದವರೂ** ಯೋಹಾನ 19:34 ನೋಡಿರಿ.

**ಆದಿಯೂ ಅಂತ್ಯವೂ** ಇದು ಗ್ರೀಕ್ ಅಕ್ಷರಮಾಲೆಯ ಪ್ರಥಮ ಮತ್ತು ಕೊನೆಯ ಅಕ್ಷರವಾಗಿದೆ. ಈ ವಿಧದಲ್ಲಿ ದೇವರು ಪ್ರಾರಂಭಿಕನೂ ಮತ್ತು ಮುಕ್ತಾಯಗಾರನೂ ಆಗಿದ್ದಾನೆ.

**ಮನುಷ್ಯಕುಮಾರ** ಇದು ಯೇಸುವಿನ ಹೆಸರು. ದಾನಿಯೇಲನು 7:13.

ಏಳು ನಕ್ಷತ್ರಗಳ ಮತ್ತು ನೀನು ಕಂಡ ಏಳು ದೀಪಸ್ತಂಭಗಳ
ಗೂಢಾರ್ಥವು ಹೀಗಿದೆ: ಏಳು ದೀಪಸ್ತಂಭಗಳೆಂದರೆ ಏಳು
ಸಭೆಗಳು. ಏಳು ನಕ್ಷತ್ರಗಳೆಂದರೆ ಏಳು ಸಭೆಗಳ ದೂತರು''
ಎಂದು ಹೇಳಿದನು.

### ಎಫೆಸದಲ್ಲಿರುವ ಸಭೆಗೆ ಯೇಸುವಿನ ಪತ್ರ

2 ''ಎಫೆಸದಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ: ''ತನ್ನ
ಬಲಗೈಯಲ್ಲಿ ಏಳು ನಕ್ಷತ್ರಗಳನ್ನು ಹಿಡಿದಿರುವಾತನು
ಮತ್ತು ಏಳು ದೀಪಸ್ತಂಭಗಳ ನಡುವೆ ತಿರುಗಾಡುವಾತನು ನಿನಗೆ
ಇವುಗಳನ್ನು ಹೇಳುತ್ತಾನೆ. 2ನೀನು ಮಾಡುತ್ತಿರುವುದು ನನಗೆ
ತಿಳಿದಿದೆ. ನೀನು ಕಷ್ಟಪಟ್ಟು ಕೆಲಸ ಮಾಡುತ್ತಾ ತಾಳ್ಮೆಯಿಂದಿ
ರುವೆ. ನೀನು ಕೆಟ್ಟ ಜನರನ್ನು ಸಹಿಸಿಕೊಳ್ಳುವುದಿಲ್ಲ ಎಂಬುದು
ನನಗೆ ತಿಳಿದಿದೆ. ಅಪೊಸ್ತಲರಾಗಿಲ್ಲದಿದ್ದರೂ ತಮ್ಮನ್ನು
ಅಪೊಸ್ತಲರೆಂದು ಹೇಳಿಕೊಳ್ಳುವವರನ್ನು ನೀನು ಪರೀಕ್ಷಿಸಿ,
ಅವರು ಸುಳ್ಳುಗಾರರೆಂಬುದನ್ನು ಕಂಡುಹಿಡಿದಿರುವೆ. 3ನೀನು
ತಾಳ್ಮೆಯಿಂದ ಸತತವಾಗಿ ಪ್ರಯತ್ನಿಸುತ್ತಿರುವೆ; ನನ್ನ ಹೆಸರಿನ
ನಿಮಿತ್ತ ಬಾಧೆಯನ್ನು ಬೇಸರಪಡದೆ ಸಹಿಸಿಕೊಂಡೆ.
4''ಆದರೆ ನಿನ್ನ ವಿರುದ್ಧವಾಗಿ ನಾನು ಹೇಳುವುದೇನಂದರೆ:
ನಿನ್ನ ಮೊದಲಿನ ಪ್ರೀತಿಯನ್ನು ತೊರೆದು ಬಿಟ್ಟಿರುವೆ. 5ಆದು
ದರಿಂದ ನೀನು ಎಲ್ಲಿಂದ ಬಿದ್ದಿದ್ದೀ ಎಂಬುದನ್ನು ನೆನಪು
ಮಾಡಿಕೊ; ಮನಸ್ಸನ್ನು ಪರಿವರ್ತಿಸಿಕೊ. ನೀನು ಮೊದಲು
ಮಾಡಿದ ಕಾರ್ಯಗಳನ್ನು ಮಾಡು. ನೀನು ಪರಿವರ್ತನೆಗೊಳ್ಳ
ದಿದ್ದರೆ ನಾನು ನಿನ್ನಲ್ಲಿಗೆ ಬಂದು ನಿನ್ನ ದೀಪಸ್ತಂಭವನ್ನು ಅದರ
ಜಾಗದಿಂದ ತೆಗೆದುಕೊಂಡು ಹೋಗುತ್ತೇನೆ. 6ಆದರೆ ನೀನು
ಯೋಗ್ಯವಾದ ಒಂದನ್ನು ಮಾಡುವೆ. ಅದೇನಂದರೆ, ನಿಕೋಲಾ
ಯಿತರು* ಮಾಡುವ ಕಾರ್ಯಗಳನ್ನು ನೀನು ದ್ವೇಷಿಸುತ್ತಿ.
ನಾನು ಸಹ ಅವರ ಕಾರ್ಯಗಳನ್ನು ದ್ವೇಷಿಸುತ್ತೇನೆ.
7''ಪವಿತ್ರಾತ್ಮನು ಸಭೆಗಳಿಗೆ ಹೇಳುತ್ತಿರುವ ಈ ವಿಷಯಗಳನ್ನು
ಕೇಳುತ್ತಿರುವವನೇ, ಗಮನವಿಟ್ಟು ಆಲಿಸು. ಯಾವನು ಜಯ
ಗಳಿಸುತ್ತಾನೋ ಅವನಿಗೆ ತಿನ್ನಲು ಜೀವದಾಯಕ ಮರದ
ಹಣ್ಣನ್ನು ಕೊಡುತ್ತೇನೆ. ಈ ಮರವು ದೇವರ ತೋಟದಲ್ಲಿದೆ.

### ಸ್ಮುರ್ನದಲ್ಲಿರುವ ಸಭೆಗೆ ಯೇಸುವಿನ ಪತ್ರ

8''ಸ್ಮುರ್ನದಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ:
''ಆದಿಯೂ ಅಂತ್ಯವೂ ಆಗಿರುವಾತನು ನಿನಗೆ ಇವುಗಳನ್ನು
ಹೇಳುತ್ತಾನೆ. ಸತ್ತು ಜೀವಂತವಾಗಿ ಎದ್ದು ಬಂದಾತನು ಆತನೇ.
9ನಿನ್ನ ಸಂಕಟಗಳನ್ನು ನಾನು ಬಲ್ಲೆನು. ನೀನು ಬಡವನೆಂಬುದೂ
ನನಗೆ ತಿಳಿದಿದೆ. ಆದರೆ ನೀನು ನಿಜವಾಗಿಯೂ ಶ್ರೀಮಂತ. ನಿನ್ನ
ಬಗ್ಗೆ ಕೆಲವು ಜನರು ಹೇಳುವ ಕೆಟ್ಟ ಸಂಗತಿಗಳು ನನಗೆ ತಿಳಿದಿವೆ. ಆ
ಜನರು ತಮ್ಮನ್ನು ಯೆಹೂದ್ಯರೆಂದು ಹೇಳಿಕೊಳ್ಳುತ್ತಾರೆ. ಆದರೆ
ಅವರು ನಿಜವಾದ ಯೆಹೂದ್ಯರಲ್ಲ. ಅವರು ಸೈತಾನನ ಸಮಾಜ
ದವರಾಗಿದ್ದಾರೆ. 10ನಿನಗೆ ಸಂಭವಿಸುವ ಸಂಗತಿಗಳ ವಿಷಯ
ದಲ್ಲಿ ಭಯಪಡಬೇಡ. ನಾನು ನಿನಗೆ ಹೇಳುವುದೇನಂದರೆ,
ಸೈತಾನನು ನಿಮ್ಮಲ್ಲಿ ಕೆಲವರನ್ನು ಪರೀಕ್ಷಿಸುವುದಕ್ಕಾಗಿ ಸೆರೆ
ಮನೆಗೆ ಹಾಕಿಸುತ್ತಾನೆ. ನೀವು ಹತ್ತು ದಿನಗಳ ಕಾಲ ಸಂಕಟವನ್ನು
ಅನುಭವಿಸುವಿರಿ. ನೀನು ಸಾಯಬೇಕಾದರೂ ನಂಬಿಗಸ್ತ
ನಾಗಿದ್ದರೆ, ನಾನು ನಿನಗೆ ಜೀವವೆಂಬ ಕಿರೀಟವನ್ನು ದಯ
ಪಾಲಿಸುವೆನು.
11ಪವಿತ್ರಾತ್ಮನು ಸಭೆಗಳಿಗೆ ತಿಳಿಸುತ್ತಿರುವ ಈ ವಿಷಯಗಳನ್ನು
ಕೇಳುತ್ತಿರುವವನೇ, ಗಮನವಿಟ್ಟು ಆಲಿಸು. ಜಯಹೊಂದು
ವವನಿಗೆ ಎರಡನೆಯ ಮರಣದಿಂದ ಕೇಡಾಗುವುದೇ ಇಲ್ಲ.

### ಪೆರ್ಗಮದಲ್ಲಿರುವ ಸಭೆಗೆ ಯೇಸುವಿನ ಪತ್ರ

12''ಪೆರ್ಗಮದಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ:
''ಹರಿತವಾದ ಇಬ್ಬಾಯಿಖಡ್ಗವನ್ನು ಹೊಂದಿರುವಾತನು
ನಿನಗೆ ಇವುಗಳನ್ನು ಹೇಳುತ್ತಾನೆ. 13ನೀನು ಎಲ್ಲಿ ವಾಸಮಾಡು
ತ್ತಿರುವೆ ಎಂಬುದು ನನಗೆ ತಿಳಿದಿದೆ. ಸೈತಾನನ ಸಿಂಹಾಸನವಿರುವ
ಕಡೆಯಲ್ಲಿ ನೀನು ವಾಸಿಸುತ್ತಿರುವೆ. ಆದರೆ ನೀನು ನನಗೆ ನಂಬಿ
ಗಸ್ತನಾಗಿರುವೆ. ಅಂತಿಪನ ಕಾಲದಲ್ಲಿಯೂ ನೀನು ನನ್ನಲ್ಲಿ
ಟ್ಟಿರುವ ನಂಬಿಕೆಯನ್ನು ತಿಳಿಸಲು ನಿರಾಕರಿಸಲಿಲ್ಲ. ನಿನ್ನ ಪಟ್ಟಣ
ದಲ್ಲಿ ಕೊಲ್ಲಲ್ಪಟ್ಟ ಅಂತಿಪನು ನನ್ನ ನಂಬಿಗಸ್ತ ಸಾಕ್ಷಿಯಾಗಿದ್ದನು.
ನಿನ್ನ ನಗರ ಸೈತಾನನು ವಾಸಿಸುವ ನಗರವಾಗಿದೆ.
14''ಆದರೆ ನಿನ್ನ ವಿರುದ್ಧವಾಗಿ ಹೇಳಬೇಕಾದ ಕೆಲವು
ಸಂಗತಿಗಳಿವೆ. ನಿನ್ನ ಸಭೆಯಲ್ಲಿ ಬಿಳಾಮನ ಬೋಧನೆಗಳನ್ನು
ಅನುಸರಿಸುವ ಜನರಿದ್ದಾರೆ. ಇಸ್ರೇಲಿನ ಜನರನ್ನು ಹೇಗೆ ಪಾಪಕ್ಕೆ
ನಡೆಸಬೇಕೆಂಬುದನ್ನು ಬಿಳಾಮನು ಬಾಲಾಕನಿಗೆ ಬೋಧಿಸಿ
ದನು. ವಿಗ್ರಹಗಳಿಗೆ ಅರ್ಪಿತವಾದ ಆಹಾರವನ್ನು ತಿನ್ನುವುದರ
ಮೂಲಕ ಹಾಗೂ ಲೈಂಗಿಕ ಪಾಪಗಳನ್ನು* ಮಾಡುವುದರ
ಮೂಲಕ ಅವರು ಪಾಪ ಮಾಡಿದರು.
15ನಿನ್ನ ಸಭೆಯಲ್ಲಿಯೂ ಇದೇ ರೀತಿ ನಡೆಯುತ್ತಿದೆ.
ನಿಕೊಲಾಯಿತರ ಬೋಧನೆಗಳನ್ನು ಅನುಸರಿಸುವ ಜನರು
ನಿನ್ನಲ್ಲಿದ್ದಾರೆ. 16ಆದ್ದರಿಂದ ನಿನ್ನ ಮನಸ್ಸನ್ನು ಪರಿವರ್ತಿಸಿಕೊ!
ಇಲ್ಲವಾದರೆ, ನಾನು ತ್ವರಿತವಾಗಿ ನಿನ್ನಲ್ಲಿಗೆ ಬಂದು, ನನ್ನ
ಬಾಯಿಂದ ಹೊರಗೆ ಬರುವ ಖಡ್ಗದಿಂದ ಆ ಜನರ ವಿರುದ್ಧ
ಹೋರಾಡುತ್ತೇನೆ. 17ಪವಿತ್ರಾತ್ಮನು ಸಭೆಗೆ ತಿಳಿಸುತ್ತಿರುವ ಈ
ಸಂಗತಿಗಳನ್ನು ಕೇಳುತ್ತಿರುವವನೇ , ಗಮನವಿಟ್ಟು ಆಲಿಸು.
''ಜಯಗಳಿಸಿದ ಪ್ರತಿಯೊಬ್ಬ ವ್ಯಕ್ತಿಗೂ ನಾನು ಅಡಗಿ
ಸಿಟ್ಟಿರುವ ಮನ್ನವನ್ನು* ಕೊಡುತ್ತೇನೆ. ಅವನಿಗೆ ನಾನು
ಬಿಳುಪಾದ ಕಲ್ಲನ್ನು ಕೊಡುತ್ತೇನೆ. ಆ ಕಲ್ಲಿನ ಮೇಲೆ ಹೊಸ
ಹೆಸರನ್ನು ಕೆತ್ತಲಾಗಿದೆ. ಈ ಹೊಸ ಹೆಸರು ಯಾರಿಗೂ ತಿಳಿದಿಲ್ಲ.
ಈ ಕಲ್ಲನ್ನು ಪಡೆದುಕೊಂಡ ವ್ಯಕ್ತಿಯು ಮಾತ್ರ ಹೊಸ ಹೆಸರನ್ನು
ತಿಳಿದುಕೊಳ್ಳುತ್ತಾನೆ.

### ಥುವತ್ತೈರದಲ್ಲಿರುವ ಸಭೆಗೆ ಯೇಸುವಿನ ಪತ್ರ

18 ''ಥುವತ್ತೈರದಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ:
''ದೇವರ ಮಗನು ಈ ಸಂಗತಿಗಳನ್ನು ಹೇಳುತ್ತಾನೆ. ಬೆಂಕಿಯ

---

**ನಿಕೋಲಾಯಿತರು** ಏಷ್ಯಾ ಮೈನರ್ ಪ್ರಾಂತ್ಯದಲ್ಲಿರುವ ಒಂದು ಧಾರ್ಮಿಕ ಗುಂಪು.

**ಲೈಂಗಿಕ ಪಾಪಗಳನ್ನು** ಇಸ್ರೇಲರ ವಿಗ್ರಹಾರಾಧನೆಯು ಆತ್ಮೀಯ ರೀತಿಯಲ್ಲಿ ವ್ಯಭಿಚಾರಕ್ಕೆ ಹೇಳಲಾಗಿದೆ. ಯೆರೆಮೀಯ 3:6-10 ಯೆಹೆಜ್ಕೇಲ 16:1-43.

**ಮನ್ನ** ವಿಮೋಚನಾ 16:4-36 ಮತ್ತು ಇಬ್ರಿಯ9:4 ನೋಡಿರಿ.

ಉರಿಯಂತೆ ಪ್ರಜ್ವಲಿಸುವ ಕಣ್ಣುಗಳೂ ಹೊಳೆಯುವ ತಾಮ್ರ
ದಂತಿರುವ ಪಾದಗಳೂ ಇರುವಾತನು, ನಿನಗೆ ಇವುಗಳನ್ನು
ಹೇಳುತ್ತಾನೆ: 19ನೀನು ಮಾಡುವ ಕಾರ್ಯಗಳು ನನಗೆ ತಿಳಿದಿವೆ.
ನಿನ್ನ ಪ್ರೀತಿ, ನಂಬಿಕೆ, ಸೇವೆ ಮತ್ತು ತಾಳ್ಮೆಗಳು ನನಗೆ ತಿಳಿದಿವೆ.
ಈಗ ನೀನು ಮೊದಲಿಗಿಂತ ಹೆಚ್ಚಿಗೆ ಮಾಡುತ್ತಿರುವುದನ್ನೂ
ಬಲ್ಲೆನು. 20ಆದರೆ ನಿನ್ನ ವಿರುದ್ಧವಾಗಿ ಇವುಗಳನ್ನು ಹೇಳ
ಬೇಕಾಗಿದೆ. ಯೆಜೆಬೇಲ್ ಎಂಬ ಸ್ತ್ರೀಯು ತನ್ನ ಇಷ್ಟದಂತೆ
ಮಾಡಲು ಅವಕಾಶ ಕೊಟ್ಟಿರುವೆ. ಆಕೆಯು ತನ್ನನ್ನು
ಪ್ರವಾದಿನಿಯೆಂದು ಹೇಳಿಕೊಂಡು ತನ್ನ ಬೋಧನೆಗಳಿಂದ ನನ್ನ
ಸೇವಕರನ್ನು ನನ್ನಿಂದ ದೂರಸೆಳೆಯುತ್ತಿದ್ದಾಳೆ. ಲೈಂಗಿಕ ಪಾಪ
ಗಳನ್ನು ಮಾಡುವಂತೆಯೂ ವಿಗ್ರಹಗಳಿಗೆ ಅರ್ಪಿತವಾದ ಆಹಾರ
ವನ್ನು ತಿನ್ನುವಂತೆಯೂ ಆಕೆಯು ನನ್ನ ಜನರನ್ನು ಪ್ರೇರೇಪಿಸು
ತ್ತಿದ್ದಾಳೆ.* 21ತನ್ನ ಮನಸ್ಸನ್ನು ಪರಿವರ್ತಿಸಿಕೊಂಡು ಪಾಪ
ಗಳಿಂದ ದೂರಸರಿಯಲು ನಾನು ಆಕೆಗೆ ಸಮಯ ಕೊಟ್ಟರೂ
ಪರಿವರ್ತನೆ ಹೊಂದಲು ಆಕೆಗೆ ಇಷ್ಟವಿಲ್ಲ. 22ಆದ್ದರಿಂದ
ಆಕೆಯು ಮಹಾ ಸಂಕಟಪಡುತ್ತಾ ಹಾಸಿಗೆಯ ಮೇಲೆ ಬಿದ್ದಿರು
ವಂತೆ ಮಾಡುತ್ತೇನೆ. ಅವಳ ಜೊತೆಯಲ್ಲಿ ಲೈಂಗಿಕ ಪಾಪ
ಮಾಡುವ ಜನರೆಲ್ಲರೂ ಮಹಾ ಸಂಕಟವನ್ನು ಅನುಭವಿಸು
ತ್ತಾರೆ. ಅವಳು ಮಾಡುವ ಕಾರ್ಯಗಳಿಗೆ ಅವರು ವಿಮುಖ
ರಾಗದಿದ್ದರೆ ನಾನು ಇದನ್ನು ಈಗಲೇ ಮಾಡುತ್ತೇನೆ. 23ನಾನು
ಅವಳ ಹಿಂಬಾಲಕರನ್ನು ಕೊಲ್ಲುತ್ತೇನೆ. ಮನುಷ್ಯರ ಅಂತರಂಗ
ವನ್ನೂ ಅವರ ಆಲೋಚನೆಗಳನ್ನೂ ತಿಳಿದಿರುವಾತನು ನಾನೇ
ಎಂಬುದನ್ನು ಆಗ ಎಲ್ಲಾ ಸಭೆಗಳವರು ತಿಳಿದುಕೊಳ್ಳುವರು.
ನಿಮ್ಮಲ್ಲಿ ಪ್ರತಿಯೊಬ್ಬನಿಗೂ ಅವನವನ ಕಾರ್ಯಗಳಿಗೆ ತಕ್ಕ
ಪ್ರತಿಫಲವನ್ನು ನೀಡುತ್ತೇನೆ.

24‘‘ಆದರೆ ಥುವತ್ತೈರದಲ್ಲಿರುವ ಇನ್ನಿತರರಿಗೆ ನಾನು
ಹೇಳುವುದೇನಂದರೆ, ನೀವು ಆಕೆಯ ಬೋಧನೆಗಳನ್ನು
ಅನುಸರಿಸಲಿಲ್ಲ, ‘ಸೈತಾನನ ಅಗಾಧವಾದ ರಹಸ್ಯಗಳು’ ಎಂದು
ಅವರು ಹೇಳುವ ಸಂಗತಿಗಳನ್ನು ನೀವು ಕಲಿತುಕೊಂಡಿಲ್ಲ.
ಆದ್ದರಿಂದ ನಾನು ಬೇರೊಂದು ಹೊರೆಯನ್ನು ನಿಮ್ಮ ಮೇಲೆ
ಹೊರಿಸುವುದಿಲ್ಲ. 25ನಾನು ಬರುವ ತನಕ ಈಗ ನೀವಿರು
ವಂತೆಯೇ ಇರಿ.

26 ‘‘ಜಯಗಳಿಸುವವನಿಗೆ ಮತ್ತು ನಾನು ಅಪೇಕ್ಷಿಸುವುದನ್ನು
ಕೊನೆಯವರೆಗೆ ಮಾಡುವವನಿಗೆ ಜನಾಂಗಗಳ ಮೇಲಿನ
ಅಧಿಕಾರವನ್ನು ನೀಡುತ್ತೇನೆ:

> 27 ‘ಅವನು ಕಬ್ಬಿಣದ ಸರಳಿನಿಂದ ಅವರನ್ನು
> ಆಳುತ್ತಾನೆ. ಮಣ್ಣಿನ ಕುಡಿಕೆಗಳೊ ಎಂಬಂತೆ
> ಅವರನ್ನು ಚೂರುಚೂರು ಮಾಡುತ್ತಾನೆ.’*
> *ಕೀರ್ತನೆ 2:9*

28ನಾನು ನನ್ನ ತಂದೆಯಿಂದ ಪಡೆದುಕೊಂಡ ಶಕ್ತಿ ಇದೇ.
ನಾನು ಅವನಿಗೆ ಉದಯಸೂಚಕ ನಕ್ಷತ್ರವನ್ನು ನೀಡುತ್ತೇನೆ.
29ಪವಿತ್ರಾತ್ಮನು ಸಭೆಗಳಿಗೆ ಹೇಳುತ್ತಿರುವ ಈ ಸಂಗತಿಗಳನ್ನು
ಕೇಳುತ್ತಿರುವವನೇ, ಗಮನವಿಟ್ಟು ಆಲಿಸು.

## ಸಾರ್ದಿಸ್‌ನಲ್ಲಿರುವ ಸಭೆಗೆ ಯೇಸುವಿನ ಪತ್ರ

3 ‘‘ಸಾರ್ದಿಸಿನಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ:
‘‘ಏಳು ಆತ್ಮಗಳನ್ನು ಮತ್ತು ಏಳು ನಕ್ಷತ್ರಗಳನ್ನು ಹೊಂದಿ
ರುವಾತನು ಹೇಳುವುದೇನೆಂದರೆ: ನೀನು ಮಾಡುತ್ತಿರುವುದು
ನನಗೆ ತಿಳಿದಿದೆ. ನೀನು ಜೀವವುಳ್ಳವನೆಂದು ಜನರು ಹೇಳು
ತ್ತಾರೆ. ಆದರೆ ನೀನು ನಿಜವಾಗಿಯೂ ಸತ್ತುಹೋಗಿರುವೆ.
2ಎದ್ದೇಳು! ಸಾಯುವ ಸ್ಥಿತಿಯಲ್ಲಿರುವಂಥವುಗಳನ್ನು ಬಲ
ಪಡಿಸು. ನೀನು ಮಾಡಿರುವ ಕಾರ್ಯಗಳು ನನ್ನ ದೇವರ ದೃಷ್ಟಿ
ಯಲ್ಲಿ ನಿಷ್ಕಳಂಕವಾಗಿರುವುದನ್ನು ನಾನು ಕಾಣಲಿಲ್ಲ. 3ಆದು
ದರಿಂದ ನೀನು ಪಡೆದುದನ್ನೂ ಕೇಳಿದುದನ್ನೂ ಮರೆಯದೆ
ಅದಕ್ಕೆ ವಿಧೇಯನಾಗಿರು. ನಿನ್ನ ಹೃದಯವನ್ನೂ ಜೀವಿತವನ್ನೂ
ಪರಿವರ್ತಿಸಿಕೊ! ಎಚ್ಚರಗೊಳ್ಳು! ಇಲ್ಲವಾದರೆ, ನಾನು ಕಳ್ಳನಂತೆ
ನಿನ್ನ ಬಳಿಗೆ ಬಂದು ಆಶ್ಚರ್ಯಗೊಳಿಸುತ್ತೇನೆ. ನಾನು ಯಾವಾಗ
ಬರುತ್ತೇನೆ ಎಂಬುದು ನಿನಗೆ ಗೊತ್ತಿರುವುದಿಲ್ಲ. 4ನಿಮ್ಮ ಸಭೆಗೆ
ಸೇರಿದ ಸಾರ್ದಿಸಿನ ಕೆಲವರು ಇನ್ನೂ ಪರಿಶುದ್ಧರಾಗಿದ್ದಾರೆ.
ಅವರು ತಮ್ಮ ಬಟ್ಟೆಗಳನ್ನು ಕೊಳಕು ಮಾಡಿಕೊಂಡಿಲ್ಲ. ಅವರು
ನನ್ನೊಂದಿಗೆ ನಡೆಯುವರು. ಅವರು ಯೋಗ್ಯರಾಗಿರು
ವುದರಿಂದ ಬಿಳಿವಸ್ತ್ರಗಳನ್ನು ಧರಿಸುತ್ತಾರೆ. 5ಜಯಗಳಿಸುವ ಪ್ರತಿ
ಯೊಬ್ಬನೂ ಈ ಜನರಂತೆ ಬಿಳಿಯ ವಸ್ತ್ರಗಳನ್ನು ಧರಿಸುತ್ತಾನೆ.
ಆ ವ್ಯಕ್ತಿಯ ಹೆಸರನ್ನು ನಾನು ಜೀವಭಾದ್ಯರ ಪುಸ್ತಕದಿಂದ
ತೆಗೆದುಹಾಕುವುದಿಲ್ಲ. ಅವನು ನನಗೆ ಸೇರಿದವನೆಂದು ನನ್ನ
ತಂದೆಯ ಮುಂದೆಯೂ ಆತನ ದೂತರ ಮುಂದೆಯೂ ಹೇಳು
ತ್ತೇನೆ. 6ಪವಿತ್ರಾತ್ಮನು ಸಭೆಗಳಿಗೆ ಹೇಳುತ್ತಿರುವ ಈ ಸಂಗತಿ
ಗಳನ್ನು ಕೇಳುತ್ತಿರುವವನೇ, ಗಮನವಿಟ್ಟು ಆಲಿಸು.

## ಫಿಲದೆಲ್ಫಿಯದಲ್ಲಿರುವ ಸಭೆಗೆ ಯೇಸುವಿನ ಪತ್ರ

7 ‘‘ಫಿಲದೆಲ್ಫಿಯದಲ್ಲಿರುವ ಸಭೆಯ ದೂತನಿಗೆ ಇದನ್ನು ಬರೆ:
‘‘ಪವಿತ್ರನೂ ಸತ್ಯವಂತನೂ ಆಗಿರುವಾತನು ನೀಡುವ
ಸಂದೇಶವಿದು: ದಾವೀದನ ಬೀಗದ ಕೈ ನನ್ನಲ್ಲಿದೆ. ನಾನು
ತೆರೆದದ್ದನ್ನು ಯಾರೂ ಮುಚ್ಚಲಾರರು;* ಮುಚ್ಚಿದ್ದನ್ನು
ಯಾರೂ ತೆರೆಯಲಾರರು. 8ನೀನು ಮಾಡುವ ಕಾರ್ಯಗಳು
ನನಗೆ ತಿಳಿದಿವೆ. ನಿನ್ನ ಮುಂದೆ ತೆರೆದಬಾಗಿಲನ್ನು ಇಟ್ಟಿದ್ದೇನೆ.
ಅದನ್ನು ಯಾರೂ ಮುಚ್ಚಲಾರರು. ನೀನು ದುರ್ಬಲನೆಂಬುದು
ನನಗೆ ತಿಳಿದಿದೆ. ಆದರೆ ನೀನು ನನ್ನ ಬೋಧನೆಯನ್ನು ಅನು
ಸರಿಸಿದೆ. ನನ್ನ ಹೆಸರನ್ನು ಹೇಳಲು ನೀನು ಹಿಂಜರಿಯಲಿಲ್ಲ.
9ಆಲಿಸು! ಅಲ್ಲಿ ಸೈತಾನನ ಗುಂಪಿಗೆ ಸೇರಿದವರಿದ್ದಾರೆ. ಆ ಜನರು
ತಮ್ಮನ್ನು ಯೆಹೂದ್ಯರೆಂದು ಹೇಳಿಕೊಳ್ಳುತ್ತಾರೆ. ಆದರೆ ಅದು
ಸುಳ್ಳು. ಅವರು ನಿಜವಾದ ಯೆಹೂದ್ಯರಲ್ಲ. ಆ ಜನರು ನಿನ್ನ
ಮುಂದೆ ಬಂದು ನಿನ್ನ ಪಾದಗಳಿಗೆ ಅಡ್ಡಬಿದ್ದು ನಮಸ್ಕರಿಸುವಂತೆ
ಮಾಡುತ್ತೇನೆ. ನಾನು ಪ್ರೀತಿಸಿದ ಜನರು ನೀವೇ ಎಂಬುದನ್ನು
ಆಗ ಅವರು ತಿಳಿದುಕೊಳ್ಳುತ್ತಾರೆ. 10ನೀನು ನನ್ನ ಆಜ್ಞೆಯನ್ನು
ಸಹನೆಯಿಂದ ಮತ್ತು ತಾಳ್ಮೆಯಿಂದ ಅನುಸರಿಸಿದೆ. ಆದ್ದರಿಂದ
ಈ ಲೋಕಕ್ಕೆಲ್ಲಾ ಉಂಟಾಗುವ ಕಡುಶೋಧನೆಯಿಂದ
ನಾನು ನಿನ್ನನ್ನು ತಪ್ಪಿಸುತ್ತೇನೆ. ಭೂನಿವಾಸಿಗಳೆಲ್ಲರನ್ನು ಈ
ಶೋಧನೆಯು ಪರಿಶೋಧಿಸುತ್ತದೆ.

---

**ವಚನ 20** ಪ್ರಕಟನೆ 2:14 ನೋಡಿರಿ.

**ಅವನು … ಮಾಡುತ್ತಾನೆ** ಕೀರ್ತನೆ 2:8-9.

**ನಾನು … ಮುಚ್ಚಲಾರರು** ಯೆಶಾಯ 22:22.

11ನಾನು ಬೇಗನೆ ಬರುತ್ತೇನೆ. ಈಗ ನೀನಿರುವಂತೆಯೇ
ಇರು. ಆಗ ಯಾರೂ ನಿನ್ನ ಕಿರೀಟವನ್ನು ಕಸಿದುಕೊಳ್ಳಲಾರರು.
12ಜಯಗಳಿಸಿದ ವ್ಯಕ್ತಿಯನ್ನು ನನ್ನ ದೇವರ ಆಲಯದಲ್ಲಿ
ಆಧಾರಸ್ತಂಭವನ್ನಾಗಿ ಮಾಡುವೆನು. ಅವನು ದೇವರ ಆಲಯ
ವನ್ನು ಮತ್ತೆಂದಿಗೂ ಬಿಟ್ಟುಹೋಗುವ ಅಗತ್ಯವಿಲ್ಲ. ನನ್ನ ದೇವರ
ಹೆಸರನ್ನೂ ನನ್ನ ದೇವರ ಪಟ್ಟಣದ ಹೆಸರನ್ನೂ ಅವನ ಮೇಲೆ
ಬರೆಯುತ್ತೇನೆ. ಹೊಸ ಜೆರುಸಲೇಮೇ ಆ ಪಟ್ಟಣ. ಆ ಪಟ್ಟಣವು
ನನ್ನ ದೇವರ ಬಳಿಯಿಂದ ಪರಲೋಕದಿಂದ ಇಳಿದು ಬರುತ್ತದೆ.
ನನ್ನ ಹೊಸ ಹೆಸರನ್ನೂ ಅವನ ಮೇಲೆ ಬರೆಯುತ್ತೇನೆ.
13ಪವಿತ್ರಾತ್ಮನು ಸಭೆಗಳಿಗೆ ಹೇಳುತ್ತಿರುವ ಈ ಸಂಗತಿಗಳನ್ನು
ಕೇಳುವವನೇ, ಗಮನವಿಟ್ಟು ಆಲಿಸು.

## ಲವೊದಿಕೀಯದ ಸಭೆಗೆ ಯೇಸುವಿನ ಪತ್ರ

14“ಲವೊದಿಕೀಯದ ಸಭೆಗೆ ಈ ಪತ್ರವನ್ನು ಬರೆ:
“ಆಮೆನ್* ಎಂಬಾತನು ಇವುಗಳನ್ನು ನಿನಗೆ ಹೇಳುತ್ತಾನೆ.
ಆತನು ನಂಬಿಗಸ್ತನಾಗಿದ್ದಾನೆ; ಸತ್ಯಸಾಕ್ಷಿಯಾಗಿದ್ದಾನೆ; ದೇವರು
ಸೃಷ್ಟಿಸಿದ್ದಕ್ಕೆಲ್ಲ ಅಧಿಪತಿಯಾಗಿದ್ದಾನೆ. ಆತನು ಹೇಳುವು
ದೇನಂದರೆ: 15ನೀನು ಮಾಡುವುದೆಲ್ಲಾ ನನಗೆ ತಿಳಿದದೆ. ನೀನು
ಬಿಸಿಯಾಗಿಯೂ ಇಲ್ಲ, ತಣ್ಣಗೂ ಇಲ್ಲ! ನೀನು ಬಿಸಿಯಾದರೂ
ಇರಬೇಕಿತ್ತು ಅಥವಾ ತಣ್ಣಗಾದರೂ ಇರಬೇಕಿತ್ತು! 16ಆದರೆ
ನೀನು ಬೆಚ್ಚಗಿರುವೆ; ಬಿಸಿಯಾಗಿಯೂ ಇಲ್ಲ, ತಣ್ಣಗೂಇಲ್ಲ.
ಆದ್ದರಿಂದ ನಿನ್ನನ್ನು ನನ್ನ ಬಾಯಿಂದ ಉಗುಳಿಬಿಡುವೆನು.
17ನೀನು ನಿನ್ನನ್ನು ಐಶ್ವರ್ಯವಂತನೆಂದು ಹೇಳಿಕೊಳ್ಳುತ್ತಿರುವೆ.
ನೀನು ಐಶ್ವರ್ಯವಂತನಾಗಿರುವುದರಿಂದ ನಿನಗೇನೂ ಕೊರತೆ
ಇಲ್ಲವೆಂದು ನೀನು ಯೋಚಿಸಿಕೊಂಡಿರುವೆ. ಆದರೆ ನಿಜ
ವಾಗಿಯೂ ನೀನು ದುರವಸ್ಥೆಗೆ ಒಳಗಾದವನಾಗಿರುವೆ,
ದೌರ್ಭಾಗ್ಯನಾಗಿರುವೆ, ದರಿದ್ರನಾಗಿರುವೆ, ಕುರುಡನಾಗಿರುವೆ
ಮತ್ತು ಬೆತ್ತಲಾಗಿರುವೆ. ಆದರೂ ಇದು ನಿನಗೆ ತಿಳಿದೇ ಇಲ್ಲ.
18ಬೆಂಕಿಯಲ್ಲಿ ಪುಟ ಹಾಕಿದ ಅಪ್ಪಟ ಚಿನ್ನವನ್ನು ನೀನು ನನ್ನಿಂದ
ಕೊಂಡುಕೊಳ್ಳಬೇಕೆಂದು ನಾನು ಸಲಹೆ ನೀಡುತ್ತೇನೆ. ಆಗ
ನೀನು ನಿಜವಾಗಿಯೂ ಶ್ರೀಮಂತನಾಗಲು ಸಾಧ್ಯ. ನಾನು ನಿನಗೆ
ಹೇಳುವುದೇನಂದರೆ: ಬಿಳಿವಸ್ತ್ರಗಳನ್ನು ಕೊಂಡುಕೊ. ಆಗ
ನೀನು ನಾಚಿಕೆಕರವಾದ ನಿನ್ನ ನಗ್ನತೆಯನ್ನು ಮುಚ್ಚಿಕೊಳ್ಳಲು
ಸಾಧ್ಯವಾಗುವುದು. ನೀನು ನಿನ್ನ ಕಣ್ಣುಗಳಿಗೆ ಔಷಧಿಯನ್ನು
ಕೊಂಡುಕೊಳ್ಳಬೇಕೆಂತಲೂ ನಾನು ನಿನಗೆ ಹೇಳುತ್ತೇನೆ. ಆಗ
ನಿನಗೆ ನಿಜವಾಗಿಯೂ ದೃಷ್ಟಿ ಬರುವುದು. 19 “ನಾನು ಪ್ರೀತಿ
ಸುವ ಜನರನ್ನೇ ನಾನು ತಿದ್ದುತ್ತೇನೆ ಮತ್ತು ಶಿಕ್ಷಿಸುತ್ತೇನೆ. ಆದ್ದ
ರಿಂದ ನೀವು ಆಸಕ್ತಿಯಿಂದಿರಿ! ದೇವರ ಕಡೆಗೆ ತಿರುಗಿಕೊಳ್ಳಿರಿ.
20ಇಗೋ, ನಾನು ಬಾಗಿಲ ಬಳಿ ನಿಂತುಕೊಂಡು ತಟ್ಟುತ್ತಿದ್ದೇನೆ.
ಯಾವನಾದರೂ ನನ್ನ ಸ್ವರವನ್ನು ಕೇಳಿ ಬಾಗಿಲನ್ನು ತೆರೆದರೆ,
ನಾನು ಒಳಗೆ ಬಂದು ಅವನೊಂದಿಗೆ ಊಟ ಮಾಡುತ್ತೇನೆ ಮತ್ತು
ಅವನೂ ನನ್ನೊಂದಿಗೆ ಊಟ ಮಾಡುತ್ತಾನೆ.

21“ನಾನು ಜಯಗಳಿಸಿ ನನ್ನ ತಂದೆಯೊಡನೆ ಆತನ
ಸಿಂಹಾಸನದ ಮೇಲೆ ಕುಳಿತುಕೊಂಡೆನು. ಅಂತೆಯೇ ಜಯ
ಗಳಿಸುವ ಪ್ರತಿಯೊಬ್ಬನೂ ನನ್ನ ಸಂಗಡ ನನ್ನ ಸಿಂಹಾಸನದ
ಮೇಲೆ ಕುಳಿತುಕೊಳ್ಳುವಂತೆ ಮಾಡುವೆನು. 22ಇವುಗಳನ್ನು
ಕೇಳುವವರೇ, ಪವಿತ್ರಾತ್ಮನು ಸಭೆಗಳಿಗೆ ಹೇಳುತ್ತಿರುವ ಈ
ಸಂಗತಿಗಳನ್ನು ಕೇಳುವವನೇ, ಗಮನವಿಟ್ಟು ಆಲಿಸು.”

## ಯೋಹಾನನು ಪರಲೋಕವನ್ನು ನೋಡಿದನು

4 ನಂತರ ನಾನು ನೋಡಿದಾಗ ನನ್ನ ಎದುರಿನಲ್ಲಿ
ಪರಲೋಕದ ಬಾಗಿಲು ತೆರೆದಿರುವುದನ್ನು ಕಂಡೆನು. ನನ್ನ
ಜೊತೆಯಲ್ಲಿ ಮೊದಲು ಮಾತನಾಡಿದ್ದ ಧ್ವನಿಯೇ ಮತ್ತೆ
ನನ್ನೊಂದಿಗೆ ಮಾತಾಡಿತು. ಆ ಧ್ವನಿಯು ತುತ್ತೂರಿಯ ಧ್ವನಿ
ಯಂತಿತ್ತು. ಆ ಧ್ವನಿಯು, “ಇಲ್ಲಿಗೆ ಹತ್ತಿ ಬಾ. ಮುಂದೆ ಸಂಭ
ವಿಸುವುದನ್ನು ನಾನು ನಿನಗೆ ತೋರಿಸುತ್ತೇನೆ” ಎಂದು ಹೇಳಿತು.
2ಕೂಡಲೇ ನಾನು ಪವಿತ್ರಾತ್ಮನವಶನಾದೆನು. ಪರಲೋಕದಲ್ಲಿ
ನನ್ನೆದುರಿಗೆ ಒಂದು ಸಿಂಹಾಸನವಿತ್ತು. ಯಾರೋ ಒಬ್ಬನು ಆ
ಸಿಂಹಾಸನದ ಮೇಲೆ ಕುಳಿತಿದ್ದನು. 3ಸಿಂಹಾಸನದ ಮೇಲೆ ಕುಳಿತ್ತಿ
ದ್ದಾತನು ಅಮೂಲ್ಯವಾದ ಸೂರ್ಯಕಾಂತ, ಪದ್ಮರಾಗ ಮಣಿಗ
ಳಂತೆ ಕಾಣುತ್ತಿದ್ದನು. ಸಿಂಹಾಸನದ ಸುತ್ತಲೂ ಪಚ್ಚೆಬಣ್ಣದ
ಕಾಮನಬಿಲ್ಲಿತ್ತು. 4ಆ ಸಿಂಹಾಸನದ ಸುತ್ತಲೂ ಇಪ್ಪತ್ನಾಲ್ಕು
ಮಂದಿ ಹಿರಿಯರು ಕುಳಿತುಕೊಂಡಿದ್ದರು. ಅವರು ಬಿಳಿ
ವಸ್ತ್ರಗಳನ್ನು ಧರಿಸಿದ್ದರು. ಅವರ ತಲೆಗಳ ಮೇಲೆ ಚಿನ್ನದ
ಕಿರೀಟಗಳಿದ್ದವು. 5ಆ ಸಿಂಹಾಸನದಿಂದ ಸಿಡಿಲಿನ ಆರ್ಭಟವೂ
ಗುಡುಗಿನ ಧ್ವನಿಯೂ ಬರುತ್ತಿತ್ತು. ಆ ಸಿಂಹಾಸನದ ಮುಂದೆ
ಏಳು ದೀಪಗಳು ಬೆಳಗುತ್ತಿದ್ದವು. ಈ ದೀಪಗಳು ದೇವರ ಏಳು
ಆತ್ಮಗಳಾಗಿದ್ದವು. 6ಇದಲ್ಲದೆ ಸಿಂಹಾಸನದ ಮುಂದೆ ಗಾಜಿನ
ಸಮುದ್ರದಂತೆ ಕಾಣುವ ವಸ್ತುವೊಂದಿತ್ತು. ಅದು ಸ್ಪಟಿಕದಂತೆ
ಸ್ವಚ್ಛವಾಗಿತ್ತು.

ಆ ಸಿಂಹಾಸನದ ಮುಂದೆ ಮತ್ತು ಅದರ ಪ್ರತಿಯೊಂದು
ಮಗ್ಗುಲಿನಲ್ಲೂ ನಾಲ್ಕು ಜೀವಿಗಳಿದ್ದವು. ಈ ಜೀವಿಗಳ ಹಿಂಭಾಗ
ದಲ್ಲೆಲ್ಲಾ ಮತ್ತು ಮುಂಭಾಗದಲ್ಲೆಲ್ಲಾ ಕಣ್ಣುಗಳು ತುಂಬಿದ್ದವು.
7ಮೊದಲನೆ ಜೀವಿಯು ಸಿಂಹದಂತಿತ್ತು. ಎರಡನೆಯದು
ಹಸುವಿನಂತಿತ್ತು. ಮೂರನೆಯದರ ಮುಖ ಮಾನವನ ಮುಖ
ದಂತಿತ್ತು. ನಾಲ್ಕನೆಯದು ಹಾರುವ ಗರುಡನಂತಿತ್ತು.* 8ಈ
ನಾಲ್ಕು ಜೀವಿಗಳಲ್ಲಿ ಪ್ರತಿಯೊಂದಕ್ಕೂ ಆರು ರೆಕ್ಕೆಗಳಿದ್ದುವು.
ಈ ಜೀವಿಗಳ ಹೊರಭಾಗದಲ್ಲೆಲ್ಲಾ ಮತ್ತು ಒಳಭಾಗದಲ್ಲೆಲ್ಲಾ
ಕಣ್ಣುಗಳಿದ್ದುವು. ಈ ನಾಲ್ಕು ಜೀವಿಗಳು ಹಗಲಿರುಳು ಎಡ
ಬಿಡದೆ ಹೀಗೆ ಹೇಳುತ್ತಿದ್ದವು:

“ದೇವರಾದ ಪ್ರಭು, ಪರಿಶುದ್ಧನು, ಪರಿಶುದ್ಧನು,
ಪರಿಶುದ್ಧನು; ಆತನು ಸರ್ವಶಕ್ತನು. ಆತನು
ಭೂತಕಾಲದಲ್ಲಿ ಇದ್ದವನೂ ವರ್ತಮಾನಕಾಲ
ದಲ್ಲಿ ಇರುವಾತನೂ ಮುಂದೆ ಬರುವಾತನೂ
ಆಗಿದ್ದಾನೆ.”

9ಈ ಜೀವಿಗಳು, ಸಿಂಹಾಸನದ ಮೇಲೆ ಕುಳಿತಿರುವಾತನಿಗೆ
ಪ್ರಭಾವ, ಗೌರವ ಮತ್ತು ಕೃತಜ್ಞತೆಗಳನ್ನು ಸಲ್ಲಿಸುತ್ತಿದ್ದವು.

---

**ಆಮೆನ್** ಇಲ್ಲಿ ಇದಕ್ಕೆ ಯೇಸುಕ್ರಿಸ್ತ ಎಂಬ ಹೆಸರಿಗೆ ಅರ್ಥೈಸಲಾಗಿದೆ. ಈ ಹೀಬ್ರೂ ಪದದ ಅರ್ಥ ಹಾಗೆಯೇ ಆಗಲಿ ಅಥವಾ ನಿಜವಾಗಲಿ.

**ವಚನ 7** ಯೆಹೆಜ್ಕೇಲ 1:4-14 ನೋಡಿರಿ.

ಯುಗ ಯುಗಾಂತರಗಳಲ್ಲಿಯೂ ಜೀವಿಸುವವನು ಆತನೇ.
10ಇಪ್ಪತ್ತನಾಲ್ಕು ಮಂದಿ ಹಿರಿಯರು ತಮ್ಮ ಕಿರೀಟಗಳನ್ನು
ತೆಗೆದು ಬದಿಗಿಟ್ಟು, ಸಿಂಹಾಸನದ ಮೇಲೆ ಕುಳಿತಿರುವಾತನಿಗೆ
ಮೊಣಕಾಲೂರಿ ನಮಸ್ಕರಿಸಿ, ಯುಗಯುಗಾಂತರಗಳಲ್ಲಿಯೂ
ಜೀವಿಸುವ ಆತನನ್ನು ಆರಾಧಿಸುತ್ತಾ ಇಂತೆಂದರು:

> 11‘‘ನಮ್ಮ ಪ್ರಭುವೇ, ನಮ್ಮ ದೇವರೇ! ನೀನು
> ಪ್ರಭಾವ, ಗೌರವ, ಶಕ್ತಿಗಳನ್ನು ಪಡೆಯಲು
> ಯೋಗ್ಯನಾಗಿರುವೆ. ಎಲ್ಲವನ್ನೂ ನಿರ್ಮಿಸಿ
> ದಾತನು ನೀನೇ. ನಿನ್ನ ಚಿತ್ತದಂತೆಯೇ ಎಲ್ಲವೂ
> ಇದ್ದವು; ಎಲ್ಲವೂ ಸೃಷ್ಟಿಗೊಂಡವು.’’

5 ಸಿಂಹಾಸನದ ಮೇಲೆ ಕುಳಿತಿರುವಾತನ ಬಲಗೈಯಲ್ಲಿ
ಒಂದು ಸುರುಳಿಯನ್ನು ನೋಡಿದೆನು. ಅದರ ಎರಡು
ಕಡೆಗಳಲ್ಲಿಯೂ ಬರಹವಿತ್ತು. ಅದು ಏಳು ಮುದ್ರೆಗಳಿಂದ
ಮುದ್ರಿತವಾಗಿತ್ತು. 2ಬಲಿಷ್ಠನಾದ ದೇವದೂತನು ಗಟ್ಟಿಯಾದ
ಧ್ವನಿಯಲ್ಲಿ, ‘‘ಈ ಸುರುಳಿಯ ಮುದ್ರೆಗಳನ್ನು ತೆಗೆಯುವುದಕ್ಕೆ
ಯೋಗ್ಯನಾದವನು ಯಾರು?’’ ಎಂದು ಪ್ರಕಟಿಸಿದನು. 3ಆದರೆ
ಪರಲೋಕದಲ್ಲಾಗಲಿ ಭೂಮಂಡಲದಲ್ಲಾಗಲಿ ಪಾತಾಳ
ದಲ್ಲಾಗಲಿ ಈ ಸುರುಳಿಯನ್ನು ಬಿಚ್ಚಿ ನೋಡುವವರು ಯಾರೂ
ಇರಲಿಲ್ಲವಾದ್ದರಿಂದ 4ನಾನು ಮತ್ತೆ ಮತ್ತೆ ಗೋಳಾಡಿದೆನು.
ಆದರೆ 5ಹಿರಿಯರಲ್ಲಿ ಒಬ್ಬನು ನನಗೆ, ‘‘ಅಳಬೇಡ! ಯೂದ
ಕುಲದ ಸಿಂಹವಾಗಿರುವಾತನು (ಕ್ರಿಸ್ತ) ಜಯಗಳಿಸಿದನು.
ಆತನು ದಾವೀದನ ಸಂತತಿಯವನು. ಆತನು ಸುರುಳಿಯನ್ನು
ಮತ್ತು ಅದರ ಏಳು ಮುದ್ರೆಗಳನ್ನು ತೆರೆಯಲು ಸಮರ್ಥ
ನಾಗಿದ್ದಾನೆ’’ ಎಂದು ಹೇಳಿದನು.
6ನಂತರ ಸಿಂಹಾಸನದ ಮತ್ತು ನಾಲ್ಕು ಜೀವಿಗಳ ಮಧ್ಯೆ ಒಂದು
ಕುರಿಮರಿಯನ್ನು ನಾನು ನೋಡಿದೆನು. ಹಿರಿಯರು ಸಹ ಆ
ಕುರಿಮರಿಯ ಸುತ್ತಲೂ ಇದ್ದರು. ಆ ಕುರಿಮರಿಯು ಕೊಲ್ಲ
ಲ್ಪಟ್ಟಂತಿತ್ತು. ಅದಕ್ಕೆ ಏಳು ಕೊಂಬುಗಳೂ ಏಳು ಕಣ್ಣುಗಳೂ
ಇದ್ದವು. ಇವು ಈ ಲೋಕಕ್ಕೆಲ್ಲಾ ಕಳುಹಿಸಲ್ಪಟ್ಟ ದೇವರ ಏಳು
ಆತ್ಮಗಳಾಗಿದ್ದವು. 7ಆ ಕುರಿಮರಿಯು ಬಂದು ಸಿಂಹಾಸನದ
ಮೇಲೆ ಕುಳಿತಿರುವಾತನ ಬಲಗೈಯಿಂದ ಸುರುಳಿಯನ್ನು
ತೆಗೆದುಕೊಂಡಿತು. 8ಆಗ ನಾಲ್ಕು ಜೀವಿಗಳು ಮತ್ತು ಇಪ್ಪತ್ನಾಲ್ಕು
ಮಂದಿ ಹಿರಿಯರು ಆ ಕುರಿಮರಿಯ ಮುಂದೆ ಮೊಣಕಾಲೂರಿ
ನಮಸ್ಕರಿಸಿದರು. ಪ್ರತಿಯೊಬ್ಬರ ಕೈಯಲ್ಲೂ ಒಂದೊಂದು ತಂತಿ
ವಾದ್ಯವಿತ್ತು. ಧೂಪವು ತುಂಬಿದ್ದ ಚಿನ್ನದ ಪಾತ್ರೆಗಳನ್ನು ಅವರು
ಹಿಡಿದುಕೊಂಡಿದ್ದರು. ಈ ಧೂಪದ ಪಾತ್ರೆಗಳು ದೇವರ ಪರಿ
ಶುದ್ಧ ಜನರ ಪ್ರಾರ್ಥನೆಗಳಾಗಿದ್ದವು. 9ಅವರೆಲ್ಲರೂ ಕುರಿಮರಿ
ಗೋಸ್ಕರ ಒಂದು ಹೊಸ ಹಾಡನ್ನು ಹಾಡಿದರು:

> ‘‘ನೀನು ಕೊಲ್ಲಲ್ಪಟ್ಟವನಾದ್ದರಿಂದ, ಸುರುಳಿ
> ಯನ್ನು ತೆಗೆದುಕೊಂಡು, ಅದರ ಮುದ್ರೆಗಳನ್ನು
> ಒಡೆಯುವುದಕ್ಕೆ ಯೋಗ್ಯನಾಗಿರುವೆ. ನೀನು
> ನಿನ್ನ ರಕ್ತದಿಂದ (ಮರಣದಿಂದ) ಸಕಲ ಕುಲ,
> ಭಾಷೆ, ಜನಾಂಗಗಳಿಂದ ಜನರನ್ನು ದೇವರಿಗಾಗಿ
> ಕೊಂಡುಕೊಂಡಿರುವೆ.
> 10 ಅವರನ್ನು ಒಂದು ರಾಜ್ಯವನ್ನಾಗಿ ಮಾಡಿದೆ; ನಮ್ಮ
> ದೇವರಿಗೋಸ್ಕರ ಯಾಜಕರನ್ನಾಗಿ ಮಾಡಿದೆ;
> ಅವರು ಲೋಕದಲ್ಲಿ ಆಳುವರು.’’

11ನಂತರ ನಾನು ನೋಡಿದಾಗ, ಅನೇಕ ದೇವದೂತರ
ಧ್ವನಿಗಳನ್ನು ಕೇಳಿದೆನು. ಈ ದೇವದೂತರು ಸಿಂಹಾಸನದ,
ನಾಲ್ಕು ಜೀವಿಗಳ ಮತ್ತು ಹಿರಿಯರ ಸುತ್ತಲೂ ಇದ್ದರು. ಅವರ
ಸಂಖ್ಯೆಯು ಲಕ್ಷೋಪಲಕ್ಷವಾಗಿಯೂ ಕೋಟ್ಯಾನು
ಕೋಟಿಯಾಗಿಯೂ ಇತ್ತು. 12ಈ ದೇವದೂತರು ಗಟ್ಟಿಯಾದ
ಧ್ವನಿಯಿಂದ ಇಂತೆಂದರು:

> ‘‘ವಧಿತನಾದ ಕುರಿಮರಿಯು ಅಧಿಕಾರವನ್ನು,
> ಸಂಪತ್ತನ್ನು, ಜ್ಞಾನವನ್ನು, ಬಲವನ್ನು, ಗೌರವ
> ವನ್ನು, ಪ್ರಭಾವವನ್ನು, ಸ್ತೋತ್ರವನ್ನು ಪಡೆಯಲು
> ಯೋಗ್ಯನಾಗಿದ್ದಾನೆ!’’

13ಇದಲ್ಲದೆ ಆಕಾಶದಲ್ಲಿಯೂ ಭೂಮಿಯಲ್ಲಿಯೂ
ಭೂಮಿಯ ಕೆಳಭಾಗದಲ್ಲೂ ಸಮುದ್ರದಲ್ಲೂ ಇರುವ ಪ್ರತಿ
ಯೊಂದು ಜೀವಿಗಳು ಹೀಗೆ ಹೇಳುವುದನ್ನು ಕೇಳಿದೆನು:

> ‘‘ಸಿಂಹಾಸನದ ಮೇಲೆ ಕುಳಿತಿರುವಾತನಿಗೂ
> ಕುರಿಮರಿಯಾದಾತನಿಗೂ ಸ್ತೋತ್ರ, ಗೌರವ,
> ಪ್ರಭಾವ, ಅಧಿಕಾರಗಳು ಯುಗಯುಗಾಂತರ
> ಗಳಲ್ಲಿಯೂ ಇರಲಿ!’’

14ಆ ನಾಲ್ಕು ಜೀವಿಗಳು ‘‘ಆಮೆನ್!’’ ಎಂದು ಹೇಳಿದವು.
ಹಿರಿಯರು ಮೊಣಕಾಲೂರಿ ಆರಾಧಿಸಿದರು.

6 ನಂತರ ಕುರಿಮರಿಯು ಏಳು ಮುದ್ರೆಗಳಲ್ಲಿ ಒಂದು
ಮುದ್ರೆಯನ್ನು ಒಡೆಯುವಾಗ ನಾನು ಗಮನಿಸಿದೆನು. ಆ
ನಾಲ್ಕು ಜೀವಿಗಳಲ್ಲಿ ಒಂದು ಜೀವಿಯು ಗುಡುಗಿನಂತೆ
ಮಾತನಾಡುವುದನ್ನು ನಾನು ಕೇಳಿದೆನು. ಅದು ‘‘ಬಾ!’’ ಎಂದು
ಹೇಳಿತು. 2ನಾನು ನೋಡಿದಾಗ ನನ್ನ ಮುಂದೆ ಒಂದು ಬಿಳಿ
ಕುದುರೆಯಿರುವುದು ನನಗೆ ಕಾಣಿಸಿತು. ಕುದುರೆಯ ಮೇಲಿದ್ದ
ಸವಾರನ ಕೈಯಲ್ಲಿ ಒಂದು ಬಿಲ್ಲು ಇತ್ತು. ಆ ಸವಾರನಿಗೆ ಒಂದು
ಕಿರೀಟವನ್ನು ಕೊಡಲಾಯಿತು. ಅವನು ಶತ್ರುವನ್ನು ಸೋಲಿ
ಸುತ್ತಾ ಜಯಗಳಿಸುವುದಕ್ಕಾಗಿ ಹೊರಟನು.
3ಆ ಕುರಿಮರಿಯು ಎರಡನೆಯ ಮುದ್ರೆಯನ್ನು ತೆಗೆಯಿತು.
ಆಗ ಎರಡನೆಯ ಜೀವಿಯು ‘‘ಬಾ!’’ ಎಂದು ಹೇಳಿದ್ದನ್ನು
ಕೇಳಿದೆನು. 4ಆಗ ಮತ್ತೊಂದು ಕುದುರೆಯು ಹೊರಗೆ ಬಂದಿತು.
ಇದು ಕೆಂಪು ಕುದುರೆಯಾಗಿತ್ತು. ಈ ಕುದುರೆಯ ಮೇಲೆ
ಕುಳಿತಿದ್ದ ಸವಾರನಿಗೆ ಲೋಕದಲ್ಲಿದ್ದ ಶಾಂತಿಯನ್ನು ತೆಗೆದು
ಹಾಕಲು ಅಧಿಕಾರವನ್ನು ಕೊಡಲಾಗಿತ್ತು. ಜನರು ಒಬ್ಬರ
ನ್ನೊಬ್ಬರು ಕೊಲ್ಲುವಂತೆ ಮಾಡಲೂ ಅವನಿಗೆ ಅಧಿಕಾರವನ್ನು
ನೀಡಲಾಗಿತ್ತು. ಈ ಸವಾರನಿಗೆ ಒಂದು ಮಹಾಖಡ್ಗವನ್ನೂ
ಕೊಡಲಾಗಿತ್ತು.
5ಆ ಕುರಿಮರಿಯು ಮೂರನೆಯ ಮುದ್ರೆಯನ್ನು ತೆಗೆಯಿತು.
ಆಗ ಮೂರನೆಯ ಜೀವಿಯು ‘‘ಬಾ’’ ಎಂದು ಹೇಳುವುದನ್ನು

ನಾನು ಕೇಳಿದೆನು. ನಾನು ನೋಡಿದಾಗ, ನನ್ನ ಮುಂದೆ ಒಂದು
ಕಪ್ಪು ಕುದುರೆಯಿರುವುದು ನನಗೆ ಕಾಣಿಸಿತು. ಆ ಕುದುರೆಯ
ಮೇಲಿದ್ದ ಸವಾರನು ತನ್ನ ಕೈಯಲ್ಲಿ ಎರಡು ತಕ್ಕಡಿಗಳನ್ನು
ಹಿಡಿದಿದ್ದನು. 6ಆಗ ಒಬ್ಬನ ಸ್ವರವೋ ಎಂಬಂತೆ ಒಂದು
ಧ್ವನಿಯನ್ನು ಕೇಳಿದೆನು. ಆ ನಾಲ್ಕು ಜೀವಿಗಳಿದ್ದ ಸ್ಥಳದಿಂದ ಈ
ಧ್ವನಿಯು ಹೊರಹೊಮ್ಮಿತು. ಆ ಧ್ವನಿಯು, ‘‘ಒಂದು ದಿನದ
ಕೆಲಸಕ್ಕೆ ಒಂದು ಕಿಲೋಗ್ರಾಂ ಗೋಧಿ. ಒಂದು ದಿನದ ಕೆಲಸಕ್ಕೆ
ಮೂರು ಕಿಲೋಗ್ರಾಂ ಬಾರ್ಲಿ. ಆದರೆ ಎಣ್ಣೆಯನ್ನೂ ದ್ರಾಕ್ಷಾ
ರಸವನ್ನೂ ಕೆಡಿಸಬೇಡಿ!’’ ಎಂದು ಹೇಳಿತು.

7ಆ ಕುರಿಮರಿಯು ನಾಲ್ಕನೆಯ ಮುದ್ರೆಯನ್ನು ತೆರೆಯಿತು.
ಆಗ ನಾಲ್ಕನೆಯ ಜೀವಿಯು, ‘‘ಬಾ’’ ಎಂದು ಹೇಳಿದ ಧ್ವನಿಯು
ನನಗೆ ಕೇಳಿಸಿತು. 8ನಾನು ನೋಡಿದಾಗ, ನನ್ನ ಮುಂದೆ ಒಂದು
ಬೂದುಬಣ್ಣದ ಕುದುರೆಯಿರುವುದು ನನಗೆ ಕಾಣಿಸಿತು. ಆ
ಕುದುರೆಯ ಮೇಲೆ ಕುಳಿತಿದ್ದ ಸವಾರನೇ ಮೃತ್ಯು.* ಅವನ
ಹಿಂದೆ ಪಾತಾಳ ಎಂಬವನು ಬಂದನು. ಅವರಿಗೆ ಭೂಮಿಯ
ಕಾಲುಭಾಗದ ಮೇಲೆ ಅಧಿಕಾರವನ್ನು ನೀಡಲಾಯಿತು. ಕತ್ತಿ
ಯಿಂದಲೂ ಬರಗಾಲದಿಂದಲೂ ರೋಗಗಳಿಂದಲೂ ಮತ್ತು
ಲೋಕದ ಮೇಲಿರುವ ಕಾಡುಮೃಗಗಳಿಂದಲೂ ಜನರನ್ನು
ಕೊಲ್ಲುವ ಅಧಿಕಾರವನ್ನು ಅವರಿಗೆ ನೀಡಲಾಯಿತು.

9ಕುರಿಮರಿಯು ಐದನೆಯ ಮುದ್ರೆಯನ್ನು ತೆರೆಯಿತು. ಆಗ
ಯಜ್ಞವೇದಿಕೆಯ ಕೆಳಗೆ ಕೆಲವು ಆತ್ಮಗಳಿರುವುದನ್ನು ನಾನು
ನೋಡಿದೆನು. ದೇವರ ಸಂದೇಶಕ್ಕೂ ತಾವು ಸ್ವೀಕರಿಸಿಕೊಂಡ
ಸತ್ಯಕ್ಕೂ ನಂಬಿಗಸ್ತರಾಗಿದ್ದ ಕಾರಣ ಕೊಲ್ಲಲ್ಪಟ್ಟ ಜನರ
ಆತ್ಮಗಳೇ ಅವು. 10ಈ ಆತ್ಮಗಳು, ‘‘ಪವಿತ್ರವಾದ ಮತ್ತು
ಸತ್ಯವಂತನಾದ ಪ್ರಭುವೇ, ನಮ್ಮನ್ನು ಕೊಂದ ಜನರಿಗೆ ತೀರ್ಪು
ನೀಡಲು ಮತ್ತು ಅವರನ್ನು ದಂಡಿಸಲು ನೀನು ಎಷ್ಟು ಕಾಲ
ತೆಗೆದುಕೊಳ್ಳುವೆ’’ ಎಂದು ಗಟ್ಟಿಯಾದ ಧ್ವನಿಯಲ್ಲಿ ಕೂಗಿದವು.
11ಆ ಆತ್ಮಗಳಲ್ಲಿ ಪ್ರತಿಯೊಂದಕ್ಕೂ ಒಂದೊಂದು ಬಿಳಿ ನಿಲು
ವಂಗಿಯನ್ನು ಕೊಡಲಾಯಿತು. ಇನ್ನು ಸ್ವಲ್ಪಕಾಲ ಕಾಯುವಂತೆ
ಅವುಗಳಿಗೆ ತಿಳಿಸಲಾಯಿತು. ಅವರ ಸಹೋದರರಲ್ಲಿ ಕೆಲವರು
ಇನ್ನೂ ಕ್ರಿಸ್ತನ ಸೇವೆಯಲ್ಲಿದ್ದಾರೆ. ಅವರೂ ಕೊಲ್ಲಲ್ಪಡಬೇಕು.
ಈ ಕೊಲೆಗಳೆಲ್ಲಾ ಮುಗಿಯುವ ತನಕ ಕಾಯಬೇಕೆಂದು ಆ
ಆತ್ಮಗಳಿಗೆ ಹೇಳಲಾಯಿತು.

12ಆ ಕುರಿಮರಿಯು ಆರನೆಯ ಮುದ್ರೆಯನ್ನು ತೆರೆಯು
ವುದನ್ನು ನಾನು ನೋಡುತ್ತಲೇ ಇದ್ದೆನು. ಆಗ ಮಹಾಭೂಕಂಪ
ವಾಯಿತು. ಸೂರ್ಯನು ತಲೆಗೂದಲಿನಿಂದ ಮಾಡಿದ ಬಟ್ಟೆ
ಯಂತೆ ಕಪ್ಪಾದನು. ಪೂರ್ಣಚಂದ್ರನು ರಕ್ತದಂತೆ ಕೆಂಪಾದನು.
13ಆಕಾಶದಲ್ಲಿದ್ದ ನಕ್ಷತ್ರಗಳು ಬಿರುಗಾಳಿ ಬೀಸಿದಾಗ ಅಂಜೂ
ರದ ಹಣ್ಣುಗಳು ಮರದಿಂದ ಭೂಮಿಯ ಮೇಲೆ ಉದುರುವಂತೆ
ಉದುರಿದವು. 14ಆಕಾಶವು ವಿಭಾಗಗೊಂಡು ಸುರುಳಿಯಂತೆ
ಸುತ್ತಲ್ಪಟ್ಟಿತು. ಪ್ರತಿಯೊಂದು ಬೆಟ್ಟ ಮತ್ತು ದ್ವೀಪಗಳು ತಮ್ಮ
ನೆಲೆಯಿಂದ ಚಲಿಸಿದವು.

15ಆಗ ಜನರೆಲ್ಲರೂ ಗವಿಗಳಲ್ಲಿ ಮತ್ತು ಬೆಟ್ಟಗಳ ಮೇಲಿನ
ಬಂಡೆಗಳ ಮರೆಯಲ್ಲಿ ಅಡಗಿಕೊಂಡರು. ಅಲ್ಲಿ ಲೋಕದ
ರಾಜರುಗಳು, ಅಧಿಪತಿಗಳು, ಸೇನಾಧಿಪತಿಗಳು, ಶ್ರೀಮಂತರು
ಮತ್ತು ಬಲಿಷ್ಠರು ಇದ್ದರು. ಇವರಲ್ಲದೆ ಪ್ರತಿಯೊಬ್ಬ
ಗುಲಾಮನೂ ಸ್ವತಂತ್ರ ಪ್ರಜೆಯೂ ಅಡಗಿಕೊಂಡರು. 16ಆ
ಜನರು ಬೆಟ್ಟಗಳಿಗೆ ಮತ್ತು ಬಂಡೆಗಳಿಗೆ, ‘‘ನಮ್ಮ ಮೇಲೆ ಬೀಳಿರಿ.
ಸಿಂಹಾಸನದ ಮೇಲೆ ಕುಳಿತಿರುವಾತನ ದೃಷ್ಟಿಯಿಂದ ನಮ್ಮನ್ನು
ಮರೆಮಾಡಿ; ಕುರಿಮರಿಯಾದಾತನ ಕೋಪದಿಂದ ನಮ್ಮನ್ನು
ಮರೆಮಾಡಿ; 17ಆತನ ಕೋಪವು ಪ್ರಕಟವಾಗುವ ಮಹಾದಿನವು
ಬಂದುಬಿಟ್ಟಿದೆ. ಆ ಕೋಪದ ಎದುರಿನಲ್ಲಿ ನಿಲ್ಲಲು ಯಾರಿಗೂ
ಸಾಧ್ಯವಿಲ್ಲ’’ ಎಂದು ಹೇಳಿದರು.

### ಇಸ್ರೇಲಿನ 144,000 ಜನರು

7 ಇದಾದ ಮೇಲೆ ನಾಲ್ಕು ಮಂದಿ ದೇವದೂತರು
ಭೂಮಿಯ ನಾಲ್ಕು ಮೂಲೆಗಳಲ್ಲಿ ನಿಂತಿರುವುದನ್ನು
ನಾನು ನೋಡಿದೆನು. ಆ ದೇವದೂತರು ಭೂಮಿಯ ನಾಲ್ಕು
ದಿಕ್ಕುಗಳ ಗಾಳಿಯನ್ನೂ ತಡೆಹಿಡಿದಿದ್ದರು. ಗಾಳಿಯು
ಭೂಮಿಯ ಮೇಲಾಗಲಿ, ಸಮುದ್ರದ ಮೇಲಾಗಲಿ, ಮರದ
ಮೇಲಾಗಲಿ ಬೀಸದಂತೆ ಅವರು ತಡೆಹಿಡಿದಿದ್ದರು. 2ನಂತರ
ಬೇರೊಬ್ಬ ದೇವದೂತನು ಪೂರ್ವದಿಕ್ಕಿನ ಕಡೆಯಿಂದ ಬರುತ್ತಿ
ರುವುದನ್ನು ನಾನು ನೋಡಿದೆನು. ಜೀವಸ್ವರೂಪನಾದ ದೇವರ
ಮುದ್ರೆಯು ಈ ದೇವದೂತನ ಬಳಿಯಿತ್ತು. ಈ ದೇವದೂತನು
ನಾಲ್ಕು ಮಂದಿ ದೇವದೂತರನ್ನು ಗಟ್ಟಿಯಾದ ಧ್ವನಿಯಲ್ಲಿ ಕರೆ
ದನು. ಭೂಮಿಗೆ ಮತ್ತು ಸಮುದ್ರಕ್ಕೆ ತೊಂದರೆ ಮಾಡುವುದಕ್ಕೆ
ಅಧಿಕಾರವನ್ನು ದೇವರು ಈ ನಾಲ್ವರು ದೇವದೂತರಿಗೆ ನೀಡಿ
ದ್ದನು. ಆ ದೇವದೂತನು ಈ ನಾಲ್ವರು ದೇವದೂತರಿಗೆ,
3‘‘ನಮ್ಮ ದೇವರ ಸೇವೆ ಮಾಡುವ ಜನರ ಹಣೆಯ ಮೇಲೆ
ಮುದ್ರೆ ಒತ್ತುವ ತನಕ ಭೂಮಿಗಾಗಲಿ, ಸಮುದ್ರಕ್ಕಾಗಲಿ,
ಮರಗಳಿಗಾಗಲಿ ತೊಂದರೆಯನ್ನು ಮಾಡಬೇಡಿ’’ ಎಂದು ಕೂಗಿ
ಹೇಳಿದನು. 4ನಂತರ, ಮುದ್ರೆ ಒತ್ತಿಸಿಕೊಂಡವರ ಸಂಖ್ಯೆ ನನಗೆ
ಕೇಳಿಬಂತು. ಅವರ ಒಟ್ಟು ಸಂಖ್ಯೆ 144,000 ಮಂದಿ. ಅವರು
ಇಸ್ರೇಲರ ಹನ್ನೆರಡು ಕುಲಗಳಿಗೆ ಸೇರಿದವರಾಗಿದ್ದರು.

| | | |
|---|---|---|
| 5 | ಯೂದನ ಕುಲದಿಂದ | 12,000 |
| | ರೂಬೇನನ ಕುಲದಿಂದ | 12,000 |
| | ಗಾದನ ಕುಲದಿಂದ | 12,000 |
| 6 | ಆಶೇರನ ಕುಲದಿಂದ | 12,000 |
| | ನಫ್ತಾಲಿಯನ ಕುಲದಿಂದ | 12,000 |
| | ಮನಸ್ಸೆಯ ಕುಲದಿಂದ | 12,000 |
| 7 | ಸಿಮೆಯೋನನ ಕುಲದಿಂದ | 12,000 |
| | ಲೇವಿಯ ಕುಲದಿಂದ | 12,000 |
| | ಇಸ್ಸಾಕಾರನ ಕುಲದಿಂದ | 12,000 |
| 8 | ಜೆಬುಲೋನನ ಕುಲದಿಂದ | 12,000 |
| | ಯೋಸೇಫನ ಕುಲದಿಂದ | 12,000 |
| | ಬೆನ್ಯಾಮೀನನ ಕುಲದಿಂದ | 12,000 |

### ಜನರ ಮಹಾಸಮೂಹ

9ಬಳಿಕ ನಾನು ನೋಡಿದಾಗ, ಜನರ ಮಹಾ ಸಮೂಹವನ್ನು
ಕಂಡೆನು. ಅವರು ಎಣಿಸಲಾಗದಷ್ಟು ಅಸಂಖ್ಯಾತರಾಗಿದ್ದರು.

**ಮೃತ್ಯು** ಈ ಪದಕ್ಕೆ ಗ್ರೀಕ್ ಪದದಲ್ಲಿ ರೋಗ ಎಂಬ ಅರ್ಥ ಕೂಡ
ಕೊಡುತ್ತದೆ.

ಅವರಲ್ಲಿ ಸಕಲ ಜನಾಂಗ, ಕುಲ ,ಪ್ರಜೆಗಳವರೂ ಲೋಕದ
ಸಕಲ ಭಾಷೆಗಳನ್ನಾಡುವವರೂ ಇದ್ದರು. ಈ ಜನರು
ಸಿಂಹಾಸನದ ಮುಂದೆ ಮತ್ತು ಕುರಿಮರಿಯ (ಯೇಸು) ಮುಂದೆ
ನಿಂತಿದ್ದರು. ಅವರೆಲ್ಲರೂ ಬಿಳಿ ನಿಲುವಂಗಿಗಳನ್ನು
ಧರಿಸಿಕೊಂಡು ಖರ್ಜೂರದ ಗರಿಗಳನ್ನು ತಮ್ಮ ಕೈಗಳಲ್ಲಿ
ಹಿಡಿದಿದ್ದರು. [10]ಅವರು ಗಟ್ಟಿಯಾದ ಧ್ವನಿಯಲ್ಲಿ ''ಸಿಂಹಾಸನದ
ಮೇಲೆ ಕುಳಿತುಕೊಳ್ಳುವ ನಮ್ಮ ಪ್ರಭುವಿಗೆ ಮತ್ತು ಕುರಿಮರಿ
ಯಾದಾತನಿಗೆ ಜಯವು ಲಭಿಸಿತು'' ಎಂದು ಕೂಗಿದರು.
[11]ಹಿರಿಯರು ಅಲ್ಲಿದ್ದರು ಮತ್ತು ನಾಲ್ಕು ಜೀವಿಗಳು ಅಲ್ಲಿದ್ದವು.
ಅವರ ಸುತ್ತಲೂ ಮತ್ತು ಸಿಂಹಾಸನದ ಸುತ್ತಲೂ ದೇವ
ದೂತರೆಲ್ಲಾ ನಿಂತಿದ್ದರು. ದೇವದೂತರು ಸಿಂಹಾಸನದ ಮುಂದೆ
ಮೊಣಕಾಲೂರಿ ದೇವರನ್ನು ಆರಾಧಿಸಿದರು. [12]ಅವರು,
''ಆಮೆನ್! ನಮ್ಮ ದೇವರಿಗೆ ಸ್ತೋತ್ರವೂ ಪ್ರಭಾವವೂ
ಜ್ಞಾನವೂ ಕೃತಜ್ಞತಾಸ್ತುತಿಯೂ ಗೌರವವೂ ಅಧಿಕಾರವೂ
ಮತ್ತು ಬಲವೂ ಯುಗಯುಗಾಂತರಗಳಲ್ಲಿಯೂ ಇರಲಿ.
ಆಮೆನ್!'' ಎಂದರು.

[13]ಆಗ ಹಿರಿಯರಲ್ಲೊಬ್ಬನು, ''ಬಿಳಿ ನಿಲುವಂಗಿಗಳನ್ನು
ಧರಿಸಿಕೊಂಡಿರುವ ಈ ಜನರು ಯಾರು? ಅವರು ಎಲ್ಲಿಂದ
ಬಂದವರು?'' ಎಂದು ನನ್ನನ್ನು ಕೇಳಿದನು.

[14]''ಸ್ವಾಮೀ, ಅವರು ಯಾರೆಂಬುದು ನಿನಗೆ ತಿಳಿದಿದೆ''
ಎಂದು ನಾನು ಉತ್ತರಿಸಿದೆನು.

ಆಗ ಹಿರಿಯನು, ''ಈ ಜನರು ಭೀಕರ ಸಂಕಟವನ್ನು
ಅನುಭವಿಸಿ ಬಂದವರು. ಅವರು ಕುರಿಮರಿಯಾದಾತನ ರಕ್ತ
ದಿಂದ ತಮ್ಮ ನಿಲುವಂಗಿಗಳನ್ನು ತೊಳೆದುಕೊಂಡಿದ್ದಾರೆ.*
ಈಗ ಅವರು ಶುಭ್ರವಾಗಿದ್ದಾರೆ ಮತ್ತು ಬಿಳುಪಾಗಿದ್ದಾರೆ.
[15]ಆದ್ದರಿಂದ ಈ ಜನರು ಈಗ ದೇವರ ಸಿಂಹಾಸನದ ಮುಂದೆ
ಇದ್ದಾರೆ. ಅವರು ದೇವರನ್ನು ಆತನ ಆಲಯದಲ್ಲಿ ಹಗಲಿರುಳು
ಆರಾಧಿಸುತ್ತಾರೆ. ಸಿಂಹಾಸನದ ಮೇಲೆ ಕುಳಿತಿರುವಾತನು
ಅವರನ್ನು ಸಂರಕ್ಷಿಸುತ್ತಾನೆ. [16]ಆ ಜನರಿಗೆ ಮತ್ತೆ ಹಸಿವೆಯಾಗಲಿ
ಬಾಯಾರಿಕೆಯಾಗಲಿ ಸೂರ್ಯನ ತಾಪವಾಗಲಿ ಇರುವುದಿಲ್ಲ.
ಅವರನ್ನು ಯಾವ ತಾಪವೂ ಸುಡುವುದಿಲ್ಲ. [17]ಸಿಂಹಾಸನದ
ಮಧ್ಯೆ ಇರುವ ಕುರಿಮರಿಯಾದಾತನು ಅವರ ಕುರುಬನಾಗಿರು
ತ್ತಾನೆ. ಆತನು ಅವರನ್ನು ಜೀವ ನೀಡುವ ನೀರಿನ ಬುಗ್ಗೆಗಳ
ಬಳಿಗೆ ಕರೆದೊಯ್ಯುತ್ತಾನೆ. ಅವರ ಕಣ್ಣುಗಳಿಂದ ತೊಟ್ಟಿಕ್ಕುವ
ಕಣ್ಣೀರನ್ನೆಲ್ಲ ದೇವರು ಒರಸಿಹಾಕುತ್ತಾನೆ'' ಎಂದು ಹೇಳಿದನು.

### ಏಳನೆಯ ಮುದ್ರೆ

8 ಕುರಿಮರಿಯಾದಾತನು ಏಳನೆಯ ಮುದ್ರೆಯನ್ನು ಒಡೆ
ದನು. ಆಗ ಪರಲೋಕದಲ್ಲಿ ಅರ್ಧ ಗಂಟೆಯ ಕಾಲ
ನಿಶ್ಯಬ್ದವಾಯಿತು. [2]ದೇವರ ಎದುರಿನಲ್ಲಿ ಏಳು ದೇವದೂತರು
ನಿಂತಿರುವುದನ್ನು ನಾನು ನೋಡಿದೆನು. ಅವರಿಗೆ ಏಳು ತುತ್ತೂರಿ
ಗಳನ್ನು ಕೊಡಲಾಯಿತು.

[3]ಮತ್ತೊಬ್ಬ ದೇವದೂತನು ಬಂದು, ಯಜ್ಞವೇದಿಕೆಯ ಬಳಿ
ನಿಂತನು. ಈ ದೇವದೂತನು ಧೂಪವಿದ್ದ ಬಂಗಾರದ ಪಾತ್ರೆ
ಯನ್ನು ಹಿಡಿದುಕೊಂಡಿದ್ದನು. ದೇವರ ಪರಿಶುದ್ಧ ಜನರೆಲ್ಲರ
ಪ್ರಾರ್ಥನೆಗಳ ಸಂಗಡ ಅರ್ಪಿಸುವುದಕ್ಕಾಗಿ ಬಹಳ ಧೂಪವನ್ನು
ಈ ದೇವದೂತನಿಗೆ ಕೊಡಲಾಯಿತು. ಈ ದೇವದೂತನು
ಸಿಂಹಾಸನದ ಎದುರಿನಲ್ಲಿರುವ ಚಿನ್ನದ ಯಜ್ಞವೇದಿಕೆಯ
ಮೇಲೆ ಈ ಧೂಪವನ್ನು ಇಟ್ಟನು. [4]ಧೂಪದ ಹೊಗೆಯು ದೇವ
ದೂತನ ಕೈಯಿಂದ ದೇವಜನರ ಪ್ರಾರ್ಥನೆಗಳೊಂದಿಗೆ ದೇವರ
ಬಳಿಗೆ ಏರಿಹೋಯಿತು. [5]ಆಗ ದೇವದೂತನು ಧೂಪವಿದ್ದ
ಪಾತ್ರೆಯನ್ನು ಯಜ್ಞವೇದಿಕೆಯ ಬೆಂಕಿಯಿಂದ ತುಂಬಿಸಿ ಅದನ್ನು
ಭೂಮಿಯ ಮೇಲೆ ಎಸೆದನು. ಆಗ ಮಿಂಚು ಗುಡುಗುಗಳೂ
ಮತ್ತಿತರ ಧ್ವನಿಗಳೂ ಭೂಕಂಪಗಳೂ ಉಂಟಾದವು.

### ಏಳು ಮಂದಿ ದೇವದೂತರು ತಮ್ಮ ತುತೂರಿಗಳನ್ನು ಊದಿದರು

[6]ನಂತರ ಆ ಏಳು ಮಂದಿ ದೇವದೂತರು ಏಳು ತುತೂರಿ
ಗಳನ್ನು ಊದಲು ಸಿದ್ಧರಾದರು.

[7]ಮೊದಲನೆಯ ದೇವದೂತನು ತನ್ನ ತುತೂರಿಯನ್ನು
ಊದಿದನು. ಆಗ ರಕ್ತದಲ್ಲಿ ಕಲಸಿದ್ದ ಆಲಿ ಕಲ್ಲುಗಳ ಮತ್ತು
ಬೆಂಕಿಯ ಮಳೆಯು ಭೂಮಿಯ ಮೇಲೆ ಸುರಿಯಿತು.
ಭೂಮಿಯ ಮೂರನೆಯ ಒಂದು ಭಾಗ ಮತ್ತು ಹಸಿರು
ಹುಲ್ಲೆಲ್ಲಾ ಸುಟ್ಟುಹೋದವು; ಮತ್ತು ಮರಗಳಲ್ಲಿ ಮೂರನೆಯ
ಒಂದು ಭಾಗ ಸುಟ್ಟು ಹೋದವು.

[8]ಎರಡನೆಯ ದೇವದೂತನು ತನ್ನ ತುತೂರಿಯನ್ನು ಊದಿ
ದನು. ಆಗ ಬೆಂಕಿಯಿಂದ ಉರಿಯುತ್ತಿದ್ದ ದೊಡ್ಡ ಬೆಟ್ಟವೊ
ಎಂಬಂತಿದ್ದ ವಸ್ತುವೊಂದನ್ನು ಸಮುದ್ರದೊಳಕ್ಕೆ ಎಸೆಯ
ಲಾಯಿತು. ಆಗ ಸಮುದ್ರದ ಮೂರನೆಯ ಒಂದು ಭಾಗ
ರಕ್ತವಾಯಿತು. [9]ಸಮುದ್ರದಲ್ಲಿದ್ದ ಜೀವಿಗಳಲ್ಲಿ ಮೂರನೆಯ
ಒಂದು ಭಾಗ ಸತ್ತುಹೋದವು ಮತ್ತು ಹಡಗುಗಳಲ್ಲಿ
ಮೂರನೆಯ ಒಂದು ಭಾಗ ನಾಶವಾದವು.

[10]ಮೂರನೆಯ ದೇವದೂತನು ತನ್ನ ತುತೂರಿಯನ್ನು
ಊದಿದನು. ಆಗ ಪಂಜಿನಂತೆ ಉರಿಯುವ ಒಂದು ದೊಡ್ಡ
ನಕ್ಷತ್ರವು ಆಕಾಶದಿಂದ ಕೆಳಗೆ ಬಿತ್ತು. ಆ ನಕ್ಷತ್ರವು ನದಿಗಳಲ್ಲಿ
ಮತ್ತು ನೀರಿನ ಬುಗ್ಗೆಗಳಲ್ಲಿ ಮೂರನೆಯ ಒಂದು ಭಾಗದ
ಮೇಲೆ ಬಿದ್ದಿತು. [11]ಆ ನಕ್ಷತ್ರಕ್ಕೆ ''ಕಹಿ ಮರ'' * ಎಂದು ಹೆಸರು.
ನೀರಿನಲ್ಲಿ ಮೂರನೆಯ ಒಂದು ಭಾಗವು ಕಹಿಯಾಯಿತು. ಈ
ಕಹಿಯಾದ ನೀರನ್ನು ಕುಡಿದು ಅನೇಕ ಜನರು ಸತ್ತುಹೋದರು.

[12]ನಾಲ್ಕನೆಯ ದೇವದೂತನು ತನ್ನ ತುತೂರಿಯನ್ನು ಊದಿ
ದನು. ಆಗ ಸೂರ್ಯನಲ್ಲಿ ಮೂರನೆಯ ಒಂದು ಭಾಗ, ಚಂದ್ರ
ನಲ್ಲಿ ಮೂರನೆಯ ಒಂದು ಭಾಗ ಮತ್ತು ನಕ್ಷತ್ರಗಳಲ್ಲಿ
ಮೂರನೆಯ ಒಂದು ಭಾಗ ಬಡಿಯಲ್ಪಟ್ಟು ಅವುಗಳಲ್ಲಿ
ಮೂರನೆಯ ಒಂದು ಭಾಗ ಕತ್ತಲಾಯಿತು. ಹಗಲಿನಲ್ಲಿಯೂ
ರಾತ್ರಿಯಲ್ಲಿಯೂ ಮೂರನೆಯ ಒಂದು ಭಾಗಕ್ಕೆ ಬೆಳಕಿಲ್ಲ
ದಂತಾಯಿತು.

[13]ನಾನು ನೋಡುತ್ತಿದ್ದಂತೆ, ವಾಯುಮಂಡಲದ ಅತಿ ಎತ್ತರ
ದಲ್ಲಿ ಗರುಡ ಪಕ್ಷಿಯೊಂದು ಹಾರಾಡುತ್ತಿರುವುದನ್ನು ಕಂಡೆನು.

---

**ನಿಲುವಂಗಿಗಳನ್ನು ತೊಳೆದುಕೊಂಡಿದ್ದಾರೆ** ತಮ್ಮ ಪಾಪಗಳು ಕ್ಷಮಿಸಲ್ಪಡುವುದಕ್ಕಾಗಿ ಅವರು ಯೇಸುವಿನಲ್ಲಿ ನಂಬಿಕೆಯನ್ನಿಟ್ಟಿದ್ದಾರೆ ಎಂದರ್ಥ.

**ಕಹಿ ಮರ** ಇದು ಒಂದು ವಿಶೇಷ ಗಿಡದ ಹೆಸರು. ಆದರೆ ಇಲ್ಲಿ ಇದು ದುಃಖದ ಸಂಕೇತವನ್ನು ಸೂಚಿಸುತ್ತದೆ.

ಆ ಪಕ್ಷಿಯು ಗಟ್ಟಿಯಾದ ಧ್ವನಿಯಲ್ಲಿ ‘‘ತೊಂದರೆ! ತೊಂದರೆ!
ಭೂಮಿಯ ಮೇಲೆ ವಾಸಿಸುವ ಜನರಿಗೆ ತೊಂದರೆ! ಇತರ
ಮೂರು ಮಂದಿ ದೇವದೂತರು ತಮ್ಮ ತುತೂರಿಗಳನ್ನು ಊದಿ
ದಾಗ ವಿಪತ್ತುಗಳು ಆರಂಭವಾಗುತ್ತವೆ’’ ಎಂದು ಕೂಗಿತು.

9 ಐದನೆಯ ದೇವದೂತನು ತನ್ನ ತುತೂರಿಯನ್ನು ಊದಿ
ದನು. ಆಗ ಒಂದು ನಕ್ಷತ್ರವು ಆಕಾಶದಿಂದ ಭೂಮಿಯ
ಮೇಲೆ ಬಿದ್ದದ್ದನ್ನು ನಾನು ನೋಡಿದೆನು. ಆ ನಕ್ಷತ್ರಕ್ಕೆ ತಳವಿಲ್ಲದ
ಆಳವಾದ ಕೂಪಕ್ಕೆ* ಹೋಗುವ ಬೀಗದ ಕೈ ಕೊಡಲ್ಪಟ್ಟಿತು.
2ನಂತರ ಆ ನಕತ್ರವು ತಳವಿಲ್ಲದ ಆಳವಾದ ಕೂಪವನ್ನು
ತೆರೆಯಿತು. ದೊಡ್ಡ ಕುಲುಮೆಯಿಂದ ಹೊಗೆಯು ಬರುವಂತೆ
ಆ ಕೂಪದಿಂದ ಹೊಗೆ ಮೇಲಕ್ಕೆ ಬಂದಿತು. ಆ ಕೂಪದಿಂದ ಬಂದ
ಹೊಗೆಯಿಂದ ಸೂರ್ಯನೂ ಆಕಾಶವೂ ಕಪ್ಪಾದವು. 3ನಂತರ
ಮಿಡತೆಗಳು ಹೊಗೆಯೊಳಗಿಂದ ಭೂಮಿಯ ಮೇಲಕ್ಕೆ ಬಂದಿ
ಳಿದವು. ಅವುಗಳಿಗೆ ಚೇಳುಗಳಂತೆ ಕುಟುಕುವ ಶಕ್ತಿಯನ್ನು ಕೊಡ
ಲಾಯಿತು. 4ಭೂಮಿಯ ಮೇಲಿನ ಹುಲ್ಲಿಗಾಗಲಿ, ಸಸ್ಯಕ್ಕಾಗಲಿ,
ಮರಕ್ಕಾಗಲಿ, ಹಾನಿಮಾಡದಂತೆ ಆ ಮಿಡತೆಗಳಿಗೆ ತಿಳಿಸ
ಲಾಯಿತು. ತಮ್ಮ ಹಣೆಗಳ ಮೇಲೆ ದೇವರ ಮುದ್ರೆಯಿಲ್ಲದ
ಜನರನ್ನು ಹಿಂಸಿಸಲು ಅವುಗಳಿಗೆ ತಿಳಿಸಲಾಯಿತು. 5ಜನಗಳಿಗೆ
ಐದು ತಿಂಗಳ ಕಾಲ ನೋವು ಉಂಟುಮಾಡುವಂತಹ
ಶಕ್ತಿಯನ್ನು ಈ ಮಿಡತೆಗಳಿಗೆ ಕೊಡಲಾಯಿತು. ಆದರೆ ಜನರನ್ನು
ಕೊಲ್ಲುವ ಶಕ್ತಿಯನ್ನು ಮಿಡತೆಗಳಿಗೆ ಕೊಡಲಿಲ್ಲ. ಈ ಮಿಡತೆ
ಗಳು ಕುಟುಕಿದಾಗ ಚೇಳು ಕುಟುಕಿದಷ್ಟೇ ನೋವಾಗುತ್ತಿತ್ತು.
6ಆ ದಿನಗಳಲ್ಲಿ ಜನರು ಸಾಯುವುದಕ್ಕೆ ಮಾರ್ಗವನ್ನು ಹುಡುಕಿ
ದರೂ ಅವರಿಗೆ ಸಿಕ್ಕುವುದಿಲ್ಲ. ಅವರು ಮರಣವನ್ನು ಬಯಸಿ
ದರೂ ಮರಣವು ಅವರಿಗೆ ಮರೆಯಾಗುತ್ತದೆ.

7ಮಿಡತೆಗಳು ಯುದ್ಧಕ್ಕೆ ಸಿದ್ಧಪಡಿಸಿದ ಕುದುರೆಗಳಂತೆ
ಕಾಣುತ್ತಿದ್ದವು. ಅವುಗಳ ತಲೆಯ ಮೇಲೆ ಚಿನ್ನದ ಕಿರೀಟಗಳಂತಿ
ದ್ದವು; ಅವುಗಳ ಮುಖಗಳು ಮಾನವರ ಮುಖಗಳಂತಿದ್ದವು;
8ತಲೆಗೂದಲು ಸ್ತ್ರೀಯರ ತಲೆಗೂದಲಂತಿತ್ತು. ಹಲ್ಲುಗಳು
ಸಿಂಹಗಳ ಹಲ್ಲುಗಳಂತಿದ್ದವು; 9ಎದೆಗಳು ಉಕ್ಕಿನ ಕವಚಗಳಂತೆ
ಇದ್ದವು; ರೆಕ್ಕೆಗಳ ಶಬ್ದವು ಯುದ್ಧದಲ್ಲಿ ಆತುರದಿಂದ ಓಡುವ
ಅನೇಕ ಕುದುರೆಗಳ ಮತ್ತು ರಥಗಳ ಶಬ್ದದಂತಿತ್ತು;
10ಚೇಳುಗಳಿಗಿರುವಂತೆ ಕೊಂಡಿಗಳಿದ್ದವು. ಜನರಿಗೆ ಐದು
ತಿಂಗಳ ಕಾಲ ನೋವುಂಟುಮಾಡುವ ಶಕ್ತಿಯು ಅವುಗಳ ಬಾಲ
ಗಳಲ್ಲಿ ಮತ್ತು ಕೊಂಡಿಗಳಲ್ಲಿ ಇತ್ತು. 11ಮಿಡತೆಗಳಿಗೆ ಒಬ್ಬ ರಾಜ
ನಿದ್ದನು. ತಳವಿಲ್ಲದ ಕೂಪದ ದೂತನೇ ಅವುಗಳ ರಾಜ
ನಾಗಿದ್ದನು. ಅವನಿಗೆ ಹಿಬ್ರೂ ಭಾಷೆಯಲ್ಲಿ ‘‘ಅಬದ್ದೋನ್’’
ಎಂಬ ಹೆಸರಿತ್ತು. ಗ್ರೀಕ್ ಭಾಷೆಯಲ್ಲಿ ‘‘ಅಪೊಲ್ಲುವೋನ್’’
(ವಿನಾಶಕರ) ಎಂದೂ ಹೆಸರಿತ್ತು. 12ಮೊದಲನೆಯ ಮಹಾ
ವಿಪತ್ತು ಕಳೆದುಹೋಯಿತು. ಇನ್ನೂ ಎರಡು ಮಹಾವಿಪತ್ತು
ಗಳು ಬರಲಿದ್ದವು. 13ಆರನೆಯ ದೇವದೂತನು ತನ್ನ ತುತೂರಿ
ಯನ್ನು ಊದಿದನು. ಆಗ ದೇವರ ಸನ್ನಿಧಿಯಲ್ಲಿರುವ ಚಿನ್ನದ
ಯಜ್ಞವೇದಿಕೆಯ ಮೇಲಿನ ಕೊಂಬುಗಳಿಂದ ಬರುತ್ತಿರುವ ಧ್ವನಿ
ಯನ್ನು ನಾನು ಕೇಳಿದೆನು. 14ಆ ಧ್ವನಿಯು ತುತೂರಿಯಿದ್ದ
ಆರನೆಯ ದೇವದೂತನಿಗೆ, ‘‘ಯೂಫ್ರಟಿಸ್ ಎಂಬ ಮಹಾ
ನದಿಯ ಬಳಿ ಕಟ್ಟಿ ಹಾಕಿರುವ ನಾಲ್ಕು ಮಂದಿ ದೇವದೂತರನ್ನು
ಬಿಚ್ಚಿಬಿಡು’’ ಎಂದು ಹೇಳಿತು. 15ಈ ನಾಲ್ಕು ಮಂದಿ ದೇವ
ದೂತರನ್ನು ಇದೇ ವರುಷ, ಇದೇ ತಿಂಗಳು, ಇದೇ ದಿನ, ಇದೇ
ತಾಸಿಗಾಗಿ ಸಿದ್ಧಪಡಿಸಲಾಗಿತ್ತು. ಭೂಮಿಯ ಮೇಲಿರುವ ಜನ
ರಲ್ಲಿ ಮೂರನೆಯ ಒಂದು ಭಾಗವನ್ನು ಸಂಹರಿಸಲು ಇವರಿಗೆ
ಬಿಡುಗಡೆ ಮಾಡಲಾಯಿತು. 16ಅವರಲ್ಲಿದ್ದ ಅಶ್ವದಳದ ಸೈನಿಕರ
ಸಂಖ್ಯೆ ಇಪ್ಪತ್ತು ಕೋಟಿ ಎಂದು ನನಗೆ ಕೇಳಿಸಿತು.

17ನಾನು ದರ್ಶನದಲ್ಲಿ ಕುದುರೆಗಳನ್ನೂ ಕುದುರೆಗಳ
ಮೇಲಿದ್ದ ಸವಾರರನ್ನೂ ನೋಡಿದೆನು. ಅವರು ಹೀಗೆ ಕಾಣು
ತ್ತಿದ್ದರು: ಅವರು ಬೆಂಕಿಯಂತೆ ಕೆಂಪಾದ, ಕಪ್ಪಾದ ನೀಲಿಯ
ಮತ್ತು ಗಂಧಕದಂತೆ ಹಳದಿಯಾದ ಕವಚಗಳನ್ನು ಹೊಂದಿ
ದ್ದರು. ಕುದುರೆಗಳ ತಲೆಗಳು ಸಿಂಹಗಳ ತಲೆಗಳಂತೆ ಕಾಣು
ತ್ತಿದ್ದವು. ಕುದುರೆಗಳ ಬಾಯಿಂದ ಬೆಂಕಿ, ಹೊಗೆ ಮತ್ತು
ಗಂಧಕಗಳು ಬರುತ್ತಿದ್ದವು. 18ಭೂಮಿಯ ಮೇಲಿನ ಜನರಲ್ಲಿ
ಮೂರನೆಯ ಒಂದು ಭಾಗವು ಕುದುರೆಗಳ ಬಾಯಿಂದ ಹೊರ
ಬಂದ ಬೆಂಕಿ, ಹೊಗೆ ಮತ್ತು ಗಂಧಕಗಳ ಉಪದ್ರವಗಳಿಂದ
ಕೊಲ್ಲಲ್ಪಟ್ಟರು. 19ಕುದುರೆಗಳ ಶಕ್ತಿಯು ಅವುಗಳ ಬಾಯ
ಲ್ಲಿಯೂ ಬಾಲಗಳಲ್ಲಿಯೂ ಇತ್ತು. ಅವುಗಳ ಬಾಲಗಳು
ಜನರನ್ನು ಕಚ್ಚಬಲ್ಲ ಹೆಡೆಗಳುಳ್ಳ ಸರ್ಪಗಳಂತೆ ಇದ್ದವು.

20ಈ ಉಪದ್ರವಗಳಿಂದ ಸಾಯದೆ ಉಳಿದ ಜನರು ತಮ್ಮ
ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿ
ಕೊಳ್ಳಲಿಲ್ಲ. ತಮ್ಮ ಸ್ವಂತ ಕೈಗಳಿಂದ ನಿರ್ಮಿಸಿದ ವಿಗ್ರಹಗಳನ್ನು
ತೊರೆದುಬಿಡಲಿಲ್ಲ. ಅವರು ದೆವ್ವಗಳ ಆರಾಧನೆಯನ್ನು
ನಿಲ್ಲಿಸಲಿಲ್ಲ. ಚಿನ್ನ, ಬೆಳ್ಳಿ, ತಾಮ್ರ, ಕಲ್ಲು ಮತ್ತು ಮರಗಳಿಂದ
ಮಾಡಲ್ಪಟ್ಟು, ನಡೆಯಲಾರದ, ನೋಡಲಾರದ ಮತ್ತು ಕೇಳ
ಲಾರದ ವಿಗ್ರಹಗಳನ್ನು ಪೂಜಿಸುವುದನ್ನು ಅವರು ನಿಲ್ಲಿಸಲಿಲ್ಲ.
21ಈ ಜನರು ತಮ್ಮ ಹೃದಯಗಳನ್ನು ಮತ್ತು ಜೀವಿತಗಳನ್ನು
ಪರಿವರ್ತಿಸಿಕೊಳ್ಳಲಿಲ್ಲ ಮತ್ತು ಇತರರನ್ನು ಕೊಲ್ಲುವುದನ್ನು
ಬಿಟ್ಟುಬಿಡಲಿಲ್ಲ. ಅವರು ತಾವು ನಡೆಸುತ್ತಿದ್ದ ಮಾಟತಂತ್ರ
ಗಳನ್ನು, ಲೈಂಗಿಕ ಪಾಪಗಳನ್ನು ಮತ್ತು ಕಳ್ಳತನವನ್ನು ತೊರೆದು
ಬಿಡಲಿಲ್ಲ.

### ದೇವದೂತನು ಮತ್ತು ಚಿಕ್ಕ ಸುರುಳಿ

10 ನಂತರ ಮತ್ತೊಬ್ಬ ಬಲಿಷ್ಠನಾದ ದೇವದೂತ
ನೊಬ್ಬನು ಪರಲೋಕದಿಂದ ಇಳಿದುಬರುವುದನ್ನು
ನಾನು ನೋಡಿದೆನು. ಆ ದೇವದೂತನು ಮೇಘವನ್ನು ಧರಿಸಿ
ಕೊಂಡಿದ್ದನು. ಅವನ ತಲೆಯ ಸುತ್ತಲೂ ಕಾಮನಬಿಲ್ಲಿತ್ತು. ಆ
ದೇವದೂತನ ಮುಖವು ಸೂರ್ಯನಂತೆಯೂ ಅವನ ಕಾಲು
ಗಳು ಬೆಂಕಿಯ ಕಂಬಗಳಂತೆಯೂ ಇದ್ದವು. 2ಆ ದೇವದೂತನು
ಒಂದು ಚಿಕ್ಕ ಸುರುಳಿಯನ್ನು ಹಿಡಿದಿದ್ದನು. ಅವನ ಕೈಯಲ್ಲಿದ್ದ
ಸುರುಳಿಯು ಬಿಚ್ಚಿತ್ತು. ಅವನು ತನ್ನ ಬಲಪಾದವನ್ನು ಸಮುದ್ರದ
ಮೇಲೆಯೂ, ತನ್ನ ಎಡಪಾದವನ್ನು ಭೂಮಿಯ ಮೇಲೆಯೂ
ಇಟ್ಟು, 3ಸಿಂಹ ಗರ್ಜಿಸುವಂತೆ ಗಟ್ಟಿಯಾಗಿ ಆರ್ಭಟಿಸಿದನು. ಆ
ಬಳಿಕ ಏಳು ಗುಡುಗುಗಳ ಧ್ವನಿಯು ಮಾತನಾಡಿತು. 4ಅದನ್ನು
ನಾನು ಬರೆಯಬೇಕೆಂದಿದ್ದಾಗ ಪರಲೋಕದಿಂದ ಬಂದ ಒಂದು
ಧ್ವನಿಯು ನನಗೆ, ‘‘ಏಳು ಗುಡುಗುಗಳು ಹೇಳಿದುದನ್ನು ನೀನು
ಬರೆಯಬೇಡ. ಅವುಗಳನ್ನು ರಹಸ್ಯವಾಗಿಟ್ಟಿರು’’ ಎಂದು

---

**ಕೂಪ** ಪ್ರಕಟನೆ 20:1-3 ನೋಡಿರಿ.

ಹೇಳಿತು. 5ಅನಂತರ ಭೂಮಿಯ ಮೇಲೆ ಮತ್ತು ಸಮುದ್ರದ
ಮೇಲೆ ನಿಂತಿದ್ದ ಒಬ್ಬ ದೇವದೂತನನ್ನು ಕಂಡೆನು. ಅವನು ತನ್ನ
ಬಲಗೈಯನ್ನು ಪರಲೋಕದತ್ತ ಚಾಚಿದನು. 6ಆ ದೇವದೂತನು
ಯುಗಯುಗಾಂತರಗಳಲ್ಲಿಯೂ ನೆಲೆಸಿರುವಾತನ ಶಕ್ತಿಯಿಂದ
ಒಂದು ವಾಗ್ದಾನವನ್ನು ಮಾಡಿದನು. ಆಕಾಶವನ್ನು ಮತ್ತು ಅದ
ರಲ್ಲಿರುವ ಸಮಸ್ತವನ್ನು, ಭೂಮಿಯನ್ನು ಮತ್ತು ಅದರಲ್ಲಿರುವ
ಸಮಸ್ತವನ್ನು, ಸಮುದ್ರವನ್ನು ಮತ್ತು ಅದರಲ್ಲಿರುವ ಸಮಸ್ತವನ್ನು
ಆತನೇ ಸೃಷ್ಟಿಸಿದನು. ದೇವದೂತನು, ‘‘ಇನ್ನು ಕಾಯುವ
ಅಗತ್ಯವಿಲ್ಲ; 7ಏಳನೆಯ ದೇವದೂತನು ತನ್ನ ತುತೂರಿಯನ್ನು
ಊದಲು ಸಿದ್ಧನಾಗುವ ದಿನಗಳಲ್ಲಿ ದೇವರ ರಹಸ್ಯವಾದ
ಯೋಜನೆಯು ನೆರವೇರುವುದು. ದೇವರು ತನ್ನ ಸೇವಕರಾದ
ಪ್ರವಾದಿಗಳಿಗೆ ತಿಳಿಸಿದ ಸುವಾರ್ತೆಯೇ ಈ ಯೋಜನೆ’’ ಎಂದು
ಹೇಳಿದನು.

8ಬಳಿಕ ಪರಲೋಕದಿಂದ ಮತ್ತೆ ಅದೇ ಧ್ವನಿಯನ್ನು ನಾನು
ಕೇಳಿದೆನು. ಆ ಧ್ವನಿಯು ನನಗೆ ‘‘ಹೋಗು, ದೇವದೂತನ ಕೈ
ಯಲ್ಲಿರುವ ಬಿಚ್ಚಿದ ಸುರುಳಿಯನ್ನು ತೆಗೆದುಕೊ. ಆ ದೇವ
ದೂತನು ಸಮುದ್ರದ ಮೇಲೆ ಮತ್ತು ಭೂಮಿಯ ಮೇಲೆ ನಿಂತಿ
ದ್ದಾನೆ’’ ಎಂದು ಹೇಳಿತು.

9ಆದುದರಿಂದ ನಾನು ಆ ದೇವದೂತನ ಬಳಿಗೆ ಹೋಗಿ, ಆ
ಚಿಕ್ಕ ಸುರುಳಿಯನ್ನು ಕೊಡುವಂತೆ ಕೇಳಿದೆನು. ಆ ದೇವದೂತನು
ನನಗೆ, ‘‘ಸುರುಳಿಯನ್ನು ತೆಗೆದುಕೊಂಡು ಅದನ್ನು ತಿಂದುಬಿಡು.
ಅದು ನಿನ್ನ ಹೊಟ್ಟೆಯಲ್ಲಿ ಕಹಿಯಾಗಿರುವುದು. ಆದರೆ ನಿನ್ನ
ಬಾಯಲ್ಲಿ ಅದು ಜೇನಿನಂತೆ ಸಿಹಿಯಾಗಿರುವುದು’’ ಎಂದು
ಹೇಳಿದನು. 10ಆ ಚಿಕ್ಕ ಸುರುಳಿಯನ್ನು ದೇವದೂತನ ಕೈಯಿಂದ
ನಾನು ತೆಗೆದುಕೊಂಡು ತಿಂದೆನು. ನನ್ನ ಬಾಯಲ್ಲಿ ಅದು
ಜೇನಿನಂತೆ ಸಿಹಿಯಾಗಿತ್ತು. ಆದರೆ ನಾನು ಅದನ್ನು ತಿಂದ ಬಳಿಕ,
ಅದು ನನ್ನ ಹೊಟ್ಟೆಯಲ್ಲಿ ಕಹಿಯಾಯಿತು. 11ಆಗ ಅವನು
ನನಗೆ, ‘‘ನೀನು ಮತ್ತೆ ಅನೇಕ ಜನಾಂಗಗಳ, ಪ್ರಜೆಗಳ, ಭಾಷೆಗಳ
ಮತ್ತು ರಾಜರುಗಳ ವಿಷಯದಲ್ಲಿ ಪ್ರವಾದನೆ ಮಾಡಬೇಕು’’
ಎಂದು ತಿಳಿಸಿದನು.

## ಇಬ್ಬರು ಸಾಕ್ಷಿಗಳು

11 ತರುವಾಯ ದಂಡದಂತಿರುವ ಒಂದು ಅಳತೆಯ
ಕೋಲನ್ನು ನನಗೆ ಕೊಟ್ಟು ಹೀಗೆ ತಿಳಿಸಲಾಯಿತು:
‘‘ಹೋಗು, ದೇವರ ಆಲಯವನ್ನೂ ಯಜ್ಞವೇದಿಕೆಯನ್ನೂ
ಅಳತೆಮಾಡು; ಮತ್ತು ಅಲ್ಲಿ ಆರಾಧಿಸುವ ಜನರನ್ನು ಲೆಕ್ಕಹಾಕು.
2ಆದರೆ ಆಲಯದ ಹೊರಗಿರುವ ಅಂಗಳವನ್ನು ಅಳತೆಮಾಡದೆ
ಬಿಟ್ಟುಬಿಡು. ಅದನ್ನು ಯೆಹೂದ್ಯರಲ್ಲದ ಜನರಿಗೆ ಬಿಟ್ಟಿದೆ. ಆ
ಜನರು ಪವಿತ್ರ ನಗರದ ಮೇಲೆ ನಲವತ್ತೆರಡು ತಿಂಗಳ ಕಾಲ
ತುಳಿದಾಡುವರು. 3ನಾನು ನನ್ನ ಇಬ್ಬರು ಸಾಕ್ಷಿಗಳಿಗೆ ಅಧಿಕಾರ
ವನ್ನು ಕೊಡುತ್ತೇನೆ. ಅವರು ಸಾವಿರದ ಇನ್ನೂರ ಅರವತ್ತು
ದಿನಗಳ ಕಾಲ ಪ್ರವಾದನೆ ಮಾಡುತ್ತಾರೆ. ಅವರು ಗೋಣಿ
ತಟ್ಟುಗಳನ್ನು ಧರಿಸಿಕೊಂಡಿರುತ್ತಾರೆ.’’ 4ಭೂಲೋಕದ ಪ್ರಭು
ವಿನ ಸನ್ನಿಧಿಯಲ್ಲಿ ನಿಂತಿರುವ ಎರಡು ಆಲಿವ್ ಮರಗಳು ಮತ್ತು
ಎರಡು ದೀಪಸ್ತಂಭಗಳೇ ಈ ಇಬ್ಬರು ಸಾಕ್ಷಿಗಳು. 5ಈ
ಸಾಕ್ಷಿಗಳಿಗೆ ಯಾರಾದರೂ ಕೇಡುಮಾಡಲು ಪ್ರಯತ್ನಿಸಿದರೆ,
ಸಾಕ್ಷಿಗಳ ಬಾಯಿಂದ ಬೆಂಕಿಯು ಹೊರಬಂದು ಅವರ ಶತ್ರು
ವನ್ನು ಅಂದರೆ ಅವರಿಗೆ ತೊಂದರೆ ಮಾಡಲು ಪ್ರಯತ್ನಿಸಿದ್ದ
ವರನ್ನೆಲ್ಲ ಸಾಯಿಸುವುದು. 6ಈ ಸಾಕ್ಷಿಗಳು ತಮ್ಮ ಪ್ರವಾದನೆಯ
ಕಾಲದಲ್ಲಿ ಆಕಾಶದಿಂದ ಸುರಿಯುವ ಮಳೆಯನ್ನು ನಿಲ್ಲಿಸಲೂ
ನೀರನ್ನು ರಕ್ತವನ್ನಾಗಿಸಲೂ ಭೂಮಿಗೆ ಎಲ್ಲಾ ವಿಧವಾದ
ವಿಪತ್ತುಗಳನ್ನು ಕಳುಹಿಸಲೂ ಅಧಿಕಾರವನ್ನು ಹೊಂದಿರುತ್ತಾರೆ.
ಅವರು ತಮಗೆ ಇಷ್ಟ ಬಂದಷ್ಟು ಸಲ ಹೀಗೆ ಮಾಡ
ಶಕ್ತರಾಗಿದ್ದಾರೆ.

7ಈ ಇಬ್ಬರು ಸಾಕ್ಷಿಗಳು ತಮ್ಮ ಸಂದೇಶವನ್ನು ಹೇಳಿ
ಮುಗಿಸಿದ ನಂತರ, ಮೃಗವು ಅವರ ವಿರುದ್ಧ ಹೋರಾಟ
ಮಾಡುತ್ತದೆ. ಈ ಮೃಗವು ತಳವಿಲ್ಲದ ಕೂಪದಿಂದ ಮೇಲಕ್ಕೆ
ಬರುತ್ತದೆ. ಈ ಮೃಗವು ಅವರನ್ನು ಸೋಲಿಸಿ, ಕೊಂದು
ಹಾಕುತ್ತದೆ. 8ಈ ಸಾಕ್ಷಿಗಳ ಎರಡು ಶವಗಳು, ಮಹಾನಗರದ
ಬೀದಿಯಲ್ಲಿ ಬಿದ್ದಿರುತ್ತವೆ. ಈ ನಗರಕ್ಕೆ ಸೊದೋಮ್* ಮತ್ತು
ಈಜಿಪ್ಟ್ ಎಂದು ಹೆಸರಾಗುತ್ತದೆ. ಆ ನಗರದ ಹೆಸರುಗಳಿಗೆ
ವಿಶೇಷ ಅರ್ಥವಿದೆ. ಪ್ರಭುವು ಈ ನಗರದಲ್ಲಿಯೇ ಕೊಲ್ಲ
ಲ್ಪಟ್ಟನು. 9ಸಕಲ ಪ್ರಜೆ, ಕುಲ, ಭಾಷೆ, ಜನಾಂಗದವರು
ಮೂರುವರೆ ದಿನಗಳ ಕಾಲ (ಈ ಸಾಕ್ಷಿಗಳ ಎರಡು ಶವಗಳನ್ನೂ)
ನೋಡುತ್ತಾ ಇರುತ್ತಾರೆ. ಅವರನ್ನು ಸಮಾಧಿಮಾಡಲು ಜನರು
ಒಪ್ಪುವುದಿಲ್ಲ. 10ಈ ಇಬ್ಬರು ಸತ್ತದ್ದಕ್ಕಾಗಿ ಭೂಮಿಯ ಮೇಲಿನ
ಜನರು ಸಂತೋಷಗೊಳ್ಳುವರು. ಅವರು ಸಮಾರಂಭಗಳನ್ನು
ನಡೆಸಿ, ಒಬ್ಬರಿಗೊಬ್ಬರು ಉಡುಗೊರೆಗಳನ್ನು ನೀಡುತ್ತಾರೆ. ಈ
ಇಬ್ಬರು ಪ್ರವಾದಿಗಳು (ಸಾಕ್ಷಿಗಳು) ಭೂಮಿಯ ಮೇಲೆ
ವಾಸಿಸುತ್ತಿರುವ ಜನರಿಗೆ ಹೆಚ್ಚು ಸಂಕಟವನ್ನು ಉಂಟು
ಮಾಡಿದ್ದರಿಂದ ಆ ಜನರು ಹೀಗೆ ಮಾಡುತ್ತಾರೆ.

11ಆದರೆ ಮೂರುವರೆ ದಿನಗಳ ನಂತರ ದೇವರು ಆ ಇಬ್ಬರು
ಪ್ರವಾದಿಗಳಿಗೆ ಮತ್ತೆ ಜೀವಕೊಟ್ಟನು. ಆಗ ಅವರು ತಮ್ಮ
ಕಾಲೂರಿ ನಿಂತುಕೊಂಡರು. ಅವರನ್ನು ನೋಡಿದ ಜನರೆಲ್ಲರೂ
ಭಯಗ್ರಸ್ತರಾದರು. 12ಅನಂತರ ‘‘ಮೇಲೇರಿ ಬನ್ನಿ!’’ ಎಂದು
ಪರಲೋಕದಿಂದ ಮಹಾವಾಣಿಯು ಆ ಪ್ರವಾದಿಗಳಿಗೆ ತಿಳಿಸಿತು.
ಆಗ ಆ ಇಬ್ಬರು ಪ್ರವಾದಿಗಳು ಮೋಡದೊಂದಿಗೆ ಪರಲೋಕಕ್ಕೆ
ಏರಿಹೋದರು. ಅವರು ಹೋಗುವುದನ್ನು ಅವರ ಶತ್ರುಗಳು
ನೋಡುತ್ತಾ ಇದ್ದರು.

13ಆ ಸಮಯದಲ್ಲಿ ಮಹಾಭೂಕಂಪವಾಯಿತು. ಆ ನಗರದ
ಹತ್ತನೆಯ ಒಂದು ಭಾಗ ನಾಶವಾಯಿತು. ಭೂಕಂಪದಲ್ಲಿ ಏಳು
ಸಾವಿರ ಜನರು ನಾಶವಾದರು. ಸಾಯದೆ ಉಳಿದಿದ್ದ ಜನರು
ಬಹು ಭಯಗೊಂಡರು. ಅವರು ಪರಲೋಕದ ದೇವರನ್ನು
ಘನಪಡಿಸಿದರು.

14ಎರಡನೆಯ ಮಹಾವಿಪತ್ತು ಮುಗಿಯಿತು. ಮೂರನೆಯ
ಮಹಾವಿಪತ್ತು ಬೇಗನೆ ಬರಲಿದೆ.

## ಏಳನೆಯ ತುತೂರಿ

15ಏಳನೆಯ ದೇವದೂತನು ತನ್ನ ತುತೂರಿಯನ್ನು ಊದಿ
ದನು. ಆಗ ಪರಲೋಕದಲ್ಲಿ ಮಹಾಶಬ್ದಗಳು ಉಂಟಾದುವು.
ಆ ಶಬ್ದಗಳು ಹೀಗೆ ಹೇಳಿದವು:

---

**ಸೋದೋಮ್** ಕೆಟ್ಟ ಜನರು ವಾಸಮಾಡಿದ್ದ ಸ್ಥಳ. ದೇವರು ಅವರ ನಗರವನ್ನು ನಾಶಪಡಿಸುವುದರ ಮೂಲಕ ಅವರನ್ನು ದಂಡಿಸಿದನು.

‘‘ಈ ಲೋಕದ ರಾಜ್ಯವು ಈಗ ನಮ್ಮ ಪ್ರಭುವಿನ ಮತ್ತು ಆತನವನಾಗಿರುವ ಕ್ರಿಸ್ತನ ರಾಜ್ಯವಾಗಿ ಮಾರ್ಪಾಟಾಯಿತು. ಆತನು ಯುಗ ಯುಗಾಂತರಗಳಲ್ಲಿಯೂ ಆಳುವನು.’’

[16]ನಂತರ ಇಪ್ಪತ್ನಾಲ್ಕು ಮಂದಿ ಹಿರಿಯರು ಮೊಣಕಾಲೂರಿ
ದೇವರನ್ನು ಆರಾಧಿಸಿದರು. ದೇವರ ಸನ್ನಿಧಿಯಲ್ಲಿ ತಮ್ಮ
ಸಿಂಹಾಸನಗಳ ಮೇಲೆ ಕುಳಿತಿರುವ ಹಿರಿಯರೇ ಇವರು. [17]ಆ
ಹಿರಿಯರು ಹೀಗೆ ಹೇಳಿದರು:

‘‘ಪ್ರಭುವೇ, ಸರ್ವಶಕ್ತನಾದ ದೇವರೇ, ಭೂತಕಾಲದಲ್ಲಿ ಇದ್ದಾತನೇ, ವರ್ತಮಾನ ಕಾಲದಲ್ಲಿ ಇರುವಾತನೇ, ನಿನಗೆ ಕೃತಜ್ಞತಾಸ್ತುತಿ ಸಲ್ಲಿಸುತ್ತೇವೆ. ನೀನು ನಿನ್ನ ಮಹಾಶಕ್ತಿಯನ್ನು ಉಪಯೋಗಿಸಿ ನಿನ್ನ ಆಡಳಿತವನ್ನು ಆರಂಭಿಸಿದ್ದರಿಂದ ನಿನಗೆ ಕೃತಜ್ಞತಾಸ್ತುತಿ ಸಲ್ಲಿಸುತ್ತೇವೆ.
18 ಲೋಕದ ಜನರು ಕೋಪಗೊಂಡಿದ್ದರು. ಆದರೆ ಇದು ನಿನ್ನ ಕೋಪದ ಸಮಯ. ಸತ್ತವರಿಗೆ ತೀರ್ಪುನೀಡುವ ಸಮಯವಿದು. ನಿನ್ನ ಸೇವಕರಾದ ಪ್ರವಾದಿಗಳಿಗೂ ನಿನ್ನ ಪರಿಶುದ್ಧ ಜನರಿಗೂ ನಿನ್ನನ್ನು ಗೌರವಿಸುವ ದೊಡ್ಡವರಿಗೂ ಚಿಕ್ಕವರಿಗೂ ಪ್ರತಿಫಲ ನೀಡುವ ಸಮಯವಿದು. ಲೋಕನಾಶಕರನ್ನು ನಾಶಪಡಿಸುವ ಸಮಯವಿದು.’’

[19]ನಂತರ ಪರಲೋಕದಲ್ಲಿರುವ ದೇವರ ಆಲಯವು ತೆರೆ
ಯಿತು. ದೇವರು ತನ್ನ ಜನರಿಗೆ ಅನುಗ್ರಹಿಸಿದ ಒಡಂಬಡಿಕೆ
ಯನ್ನು ಇಟ್ಟಿದ್ದ ಪೆಟ್ಟಿಗೆಯು ಆತನ ಆಲಯದಲ್ಲಿ ಕಾಣಿಸಿತು.
ಆಗ ಮಿಂಚುಗಳು ಹೊಳೆದವು, ಶಬ್ದಗಳಾದವು, ಗುಡುಗು
ಗಳಾದವು, ಭೂಕಂಪಗಳಾದವು ಮತ್ತು ಆಲಿಕಲ್ಲಿನ ಮಳೆಯೂ
ಸುರಿಯಿತು.

### ಒಬ್ಬ ಸ್ತ್ರೀ ಮತ್ತು ಘಟಸರ್ಪ

12 ಆಗ ಪರಲೋಕದಲ್ಲಿ ಮಹಾ ಅದ್ಭುತವು ಕಾಣಿಸಿತು.
ಸೂರ್ಯನನ್ನು ಧರಿಸಿದ್ದ ಒಬ್ಬ ಸ್ತ್ರೀ ಅಲ್ಲಿದ್ದಳು.
ಆಕೆಯ ಪಾದದ ಕೆಳಗೆ ಚಂದ್ರನಿದ್ದನು. ಆಕೆಯ ತಲೆಯ ಮೇಲೆ
ಹನ್ನೆರಡು ನಕ್ಷತ್ರಗಳುಳ್ಳ ಒಂದು ಕಿರೀಟವಿತ್ತು. [2]ಆಕೆಯು
ಗರ್ಭಿಣಿಯಾಗಿದ್ದಳು ಆಕೆಯು ಪ್ರಸವವೇದನೆಯಿಂದ ಕೂಗಿ
ದಳು. [3]ಆಗ ಪರಲೋಕದಲ್ಲಿ ಮತ್ತೊಂದು ಅದ್ಭುತವು
ಕಾಣಿಸಿತು: ಕೆಂಪಾದ ಮಹಾ ಘಟಸರ್ಪವೊಂದು ಅಲ್ಲಿತ್ತು. ಆ
ಘಟಸರ್ಪಕ್ಕೆ ಏಳು ಹೆಡೆಗಳಿದ್ದು, ಪ್ರತಿಯೊಂದು ಹೆಡೆಯ
ಮೇಲೂ ಏಳು ಕಿರೀಟಗಳಿದ್ದವು. ಆ ಸರ್ಪಕ್ಕೆ ಹತ್ತು ಕೊಂಬು
ಗಳಿದ್ದವು. [4]ಆ ಸರ್ಪದ ಬಾಲವು ಆಕಾಶದ ನಕ್ಷತ್ರಗಳಲ್ಲಿ
ಮೂರನೆಯ ಒಂದು ಭಾಗವನ್ನು ಸೆಳೆದೆಳೆದು ಭೂಮಿಯ
ಮೇಲೆ ಎಸೆಯಿತು. ಆ ಘಟಸರ್ಪವು ಪ್ರಸವವೇದನೆ ಪಡುತ್ತಿದ್ದ
ಸ್ತ್ರೀಯ ಎದುರಿನಲ್ಲಿ ನಿಂತುಕೊಂಡಿತು. ಆ ಸ್ತ್ರೀಯು ಹೆರುವ
ಮಗುವನ್ನು ನುಂಗಿಹಾಕಲು ಆ ಸರ್ಪವು ಕಾದುಕೊಂಡಿತ್ತು. [5]ಆ
ಸ್ತ್ರೀಯು ಒಂದು ಗಂಡುಮಗುವನ್ನು ಹೆತ್ತಳು. ಅವನು ಎಲ್ಲಾ
ಜನಾಂಗಗಳನ್ನು ಕಬ್ಬಿಣದ ಕೋಲಿನಿಂದ ಆಳುತ್ತಾನೆ. ಅವಳ
ಮಗುವನ್ನು ದೇವರ ಬಳಿಗೂ ಆತನ ಸಿಂಹಾಸನದ ಬಳಿಗೂ
ತೆಗೆದುಕೊಂಡು ಹೋಗಲಾಯಿತು. [6]ಆ ಸ್ತ್ರೀಯು ತನಗಾಗಿ
ದೇವರು ಸಿದ್ಧಪಡಿಸಿದ್ದ ಮರಳುಗಾಡಿನ ಒಂದು ಸ್ಥಳಕ್ಕೆ ಓಡಿ
ಹೋದಳು. ಆ ಮರಳುಗಾಡಿನಲ್ಲಿ ಆಕೆಯನ್ನು ಸಾವಿರದ
ಇನ್ನೂರ ಅರವತ್ತು ದಿನಗಳ ಕಾಲ ಪೋಷಿಸಲಾಗುವುದು.
[7]ನಂತರ ಪರಲೋಕದಲ್ಲಿ ಒಂದು ಯುದ್ಧವಾಯಿತು.
ಮಿಕಾಯೇಲನು ಮತ್ತು ಅವನ ಸಹದೂತರು ಆ ಘಟಸರ್ಪದ
ವಿರುದ್ಧ ಹೋರಾಡಿದರು. ಆ ಘಟಸರ್ಪ ಮತ್ತು ಅದರ
ದೂತರೂ ಹೋರಾಡಿದರು. [8]ಆದರೆ ಆ ಘಟಸರ್ಪವೂ ಅದರ
ದೂತರೂ ಸೋತುಹೋಗಿ ಪರಲೋಕದಲ್ಲಿ ತಮ್ಮ ಸ್ಥಾನಗಳನ್ನು
ಕಳೆದುಕೊಂಡರು. [9]ಆ ಘಟಸರ್ಪವನ್ನು ಪರಲೋಕದಿಂದ (ಆ
ಘಟಸರ್ಪಕ್ಕೆ ಸೈತಾನನೆಂತಲೂ ಪಿಶಾಚನೆಂತಲೂ ಹೆಸರಿದೆ.
ಅದು ಲೋಕವನ್ನೆಲ್ಲಾ ತಪ್ಪುಮಾರ್ಗಕ್ಕೆ ಎಳೆಯುತ್ತಿತ್ತು.) ಅದರ
ದೂತರೊಂದಿಗೆ ಭೂಮಿಯ ಮೇಲೆ ಎಸೆಯಲಾಯಿತು.
[10]ಆಗ ಪರಲೋಕದಲ್ಲಾದ ಒಂದು ಮಹಾ ಶಬ್ದವನ್ನು ನಾನು
ಕೇಳಿದೆನು: ‘‘ನಮ್ಮ ದೇವರ ಜಯವು, ಶಕ್ತಿಯು ಮತ್ತು ರಾಜ್ಯವು
ಹಾಗೂ ಆತನವನಾಗಿರುವ ಕ್ರಿಸ್ತನ ಅಧಿಕಾರವು ಈಗ ಬಂದಿವೆ.
ನಮ್ಮ ಸಹೋದರರ ಮೇಲೆ ದೂಷಣೆ ಮಾಡುವವನನ್ನು
ಹೊರಕ್ಕೆ ಎಸೆದಿರುವುದರಿಂದ ಇವುಗಳೆಲ್ಲಾ ಬಂದಿವೆ. ನಮ್ಮ
ದೇವರ ಮುಂದೆ ಹಗಲು ರಾತ್ರಿ ನಮ್ಮ ಸಹೋದರರ ಬಗ್ಗೆ
ಅವನು ದೂರು ಹೇಳಿದನು. [11]ನಮ್ಮ ಸಹೋದರರು ಕುರಿಮರಿ
ಯಾದಾತನ ರಕ್ತದಿಂದಲೂ ತಮ್ಮ ವಾಕ್ಯದ ಬಲದಿಂದಲೂ
ಅವನನ್ನು ಸೋಲಿಸಿದರು. ಅವರು ತಮ್ಮ ಜೀವಗಳನ್ನು ಪ್ರೀತಿಸ
ಲಿಲ್ಲ. ಅವರು ಮರಣಕ್ಕೆ ಭಯಪಡಲಿಲ್ಲ. [12]ಆದುದರಿಂದ
ಪರಲೋಕವೇ, ಅದರಲ್ಲಿ ವಾಸ ಮಾಡುವವರೆಲ್ಲರೇ, ಹರ್ಷ
ಗೊಳ್ಳಿರಿ! ಆದರೆ ಭೂಮಿಯೇ, ಸಮುದ್ರವೇ, ಸೈತಾನನು ನಿಮ್ಮ
ಬಳಿಗೆ ಬಂದಿರುವುದರಿಂದ ನಿಮಗೆ ದುರ್ಗತಿಯುಂಟಾಗು
ವುದು! ಸೈತಾನನು ಕೋಪದಿಂದ ತುಂಬಿಕೊಂಡಿದ್ದಾನೆ. ಅವನಿ
ಗಿರುವುದು ಸ್ವಲ್ಪಕಾಲವೆಂಬುದು ಅವನಿಗೆ ತಿಳಿದಿದೆ.’’
[13]ಘಟಸರ್ಪಕ್ಕೆ ತನ್ನನ್ನು ಭೂಮಿಗೆ ತಳ್ಳಿಬಿಟ್ಟಿರುವುದು ತಿಳಿ
ಯಿತು. ಆದ್ದರಿಂದ ಅವನು ಗಂಡು ಮಗುವನ್ನು ಹೆತ್ತ ಸ್ತ್ರೀಯನ್ನು
ಅಟ್ಟಿಸಿಕೊಂಡು ಹೋದನು. [14]ಆದರೆ ಆ ಸ್ತ್ರೀಗೆ ಮಹಾಗರುಡನ
ಎರಡು ರೆಕ್ಕೆಗಳನ್ನು ಕೊಟ್ಟದ್ದರಿಂದ, ತನಗಾಗಿ ಮರಳುಗಾಡಿ
ನಲ್ಲಿ ಸಿದ್ಧಪಡಿಸಿದ ಸ್ಥಳಕ್ಕೆ ಹಾರಿಹೋಗಲು ಆಕೆಗೆ ಸಾಧ್ಯ
ವಾಯಿತು. ಅಲ್ಲಿ ಅವಳು ಮೂರುವರೆ ವರ್ಷಗಳ ಕಾಲ
ಪೋಷಣೆ ಹೊಂದುತ್ತಾ ಸರ್ಪಕ್ಕೆ ಕಾಣದಂತೆ ಮರೆಯಾಗಿರು
ವಳು.

[15]ಆಗ ಸರ್ಪವು ತನ್ನ ಬಾಯಿಂದ ನದಿಯಂತೆ ನೀರನ್ನು
ಹೊರಚೆಲ್ಲಿತು. ಆ ಪ್ರವಾಹದ ನೀರು ಅವಳನ್ನು ಕೊಚ್ಚಿಕೊಂಡು
ಹೋಗಲಿ ಎಂಬುದೇ ಆ ಘಟಸರ್ಪದ ಉದ್ದೇಶವಾಗಿತ್ತು.
[16]ಆದರೆ ಭೂಮಿಯು ಆ ಸ್ತ್ರೀಗೆ ಸಹಾಯ ಮಾಡಲು ತನ್ನ
ಬಾಯನ್ನು ತೆರೆದು, ಘಟಸರ್ಪದ ಬಾಯಿಂದ ಹೊರಬಂದ
ನದಿಯನ್ನು ಕುಡಿದುಬಿಟ್ಟಿತು. [17]ಆಗ ಘಟಸರ್ಪವು ಆ ಸ್ತ್ರೀಯ
ಮೇಲೆ ಬಹಳ ಕೋಪಗೊಂಡು ಆಕೆಯ ಇತರ ಮಕ್ಕಳೆಲ್ಲರ
ಮೇಲೆ ಹೋರಾಟ ಮಾಡಲು ಹೋಯಿತು. ದೇವರ ಆಜ್ಞೆ

ಗಳನ್ನು ಅನುಸರಿಸುವವರೂ ಯೇಸುವಿನ ಕುರಿತು ಸಾಕ್ಷಿ ಹೇಳು
ವವರೂ ಆಕೆಯ ಮಕ್ಕಳಾಗಿದ್ದಾರೆ.
18ಆ ಘಟಸರ್ಪವು ಸಮುದ್ರ ತೀರದಲ್ಲಿ ನಿಂತುಕೊಂಡಿತು.

### ಎರಡು ಪ್ರಾಣಿಗಳು

13 ನಂತರ ಸಮುದ್ರದಿಂದ ಒಂದು ಮೃಗವು ಹೊರಗೆ
ಬರುತ್ತಿರುವುದನ್ನು ನಾನು ನೋಡಿದೆನು. ಅದಕ್ಕೆ ಹತ್ತು
ಕೊಂಬುಗಳೂ ಏಳು ತಲೆಗಳೂ ಇದ್ದವು. ಅದರ ಪ್ರತಿಯೊಂದು
ಕೊಂಬಿನ ಮೇಲೆ ಒಂದೊಂದು ಕಿರೀಟವಿತ್ತು. ಪ್ರತಿಯೊಂದು
ತಲೆಯ ಮೇಲೂ ದೇವದೂಷಣೆ ನಾಮಗಳನ್ನು ಬರೆಯ
ಲಾಗಿತ್ತು. 2ಈ ಮೃಗವು ನೋಡಲು ಚಿರತೆಯಂತಿತ್ತು. ಅದರ
ಪಾದಗಳು ಕರಡಿಯ ಪಾದಗಳಂತಿದ್ದವು. ಅದರ ಬಾಯಿಯು
ಸಿಂಹದ ಬಾಯಿಯಂತಿತ್ತು. ಘಟಸರ್ಪವು ಆ ಮೃಗಕ್ಕೆ ತನ್ನ
ಶಕ್ತಿಯನ್ನು, ತನ್ನ ಸಿಂಹಾಸನವನ್ನು ಮತ್ತು ಅಧಿಕವಾದ
ಅಧಿಕಾರವನ್ನು ನೀಡಿತು. 3ಮೃಗದ ತಲೆಗಳಲ್ಲಿ ಒಂದು ತಲೆಯು
ಗಾಯಗೊಂಡು ಸತ್ತಂತೆ ಕಾಣುತ್ತಿತ್ತು. ಆದರೆ ಮರಣಕರವಾದ
ಈ ಗಾಯವನ್ನು ವಾಸಿಮಾಡಲಾಯಿತು. ಈ ಲೋಕದಲ್ಲಿದ್ದ
ಜನರೆಲ್ಲರೂ ಆಶ್ಚರ್ಯಗೊಂಡು ಆ ಮೃಗವನ್ನು ಹಿಂಬಾಲಿ
ಸಿದರು. 4ಆ ಘಟಸರ್ಪವು ತನ್ನ ಶಕ್ತಿಯನ್ನೆಲ್ಲಾ ಆ ಮೃಗಕ್ಕೆ
ನೀಡಿದ್ದರಿಂದ ಜನರೆಲ್ಲರೂ ಆ ಸರ್ಪವನ್ನೂ ಆ ಮೃಗವನ್ನೂ
ಆರಾಧಿಸಿ, ''ಮೃಗಕ್ಕಿಂತಲೂ ಅಧಿಕ ಬಲಶಾಲಿಗಳು ಯಾರಿ
ದ್ದಾರೆ? ಅದರ ವಿರುದ್ಧ ಯಾರು ಹೋರಾಡಬಲ್ಲರು?''
ಎಂದು ಹೇಳುತ್ತಿದ್ದರು.
5ಆ ಮೃಗಕ್ಕೆ ಬಡಾಯಿಮಾತುಗಳನ್ನೂ ದೂಷಣೆಯ
ಮಾತುಗಳನ್ನೂ ಆಡಲು ಅವಕಾಶ ನೀಡಲಾಯಿತು. ಆ ಮೃಗಕ್ಕೆ
ಅದರ ಶಕ್ತಿಯನ್ನು ನಲವತ್ತೆರಡು ತಿಂಗಳ ಕಾಲ ಬಳಸಲು
ಅವಕಾಶ ನೀಡಲಾಯಿತು. 6ಆ ಮೃಗವು ದೇವರಿಗೆ ಅಪಮಾನ
ಮಾಡಲು ತನ್ನ ಬಾಯನ್ನು ತೆರೆಯಿತು. ಅಲ್ಲದೆ ದೇವರ ಹೆಸರಿನ
ವಿರುದ್ಧವಾಗಿಯೂ ದೇವರು ವಾಸಿಸುವ ಸ್ಥಳದ ವಿರುದ್ಧ
ವಾಗಿಯೂ ಪರಲೋಕದಲ್ಲಿ ಜೀವಿಸುವ ಜನರೆಲ್ಲರ ವಿರುದ್ಧ
ವಾಗಿಯೂ ದೂಷಣೆ ಮಾಡಿತು. 7ದೇವರ ಪರಿಶುದ್ಧ ಜನರ
ವಿರುದ್ಧ ಯುದ್ಧಮಾಡಿ, ಅವರನ್ನು ಸೋಲಿಸುವ ಶಕ್ತಿಯನ್ನು
ಮೃಗಕ್ಕೆ ನೀಡಲಾಯಿತು. ಸಕಲ ಕುಲ, ಪ್ರಜೆ, ಭಾಷೆ ಮತ್ತು
ಜನಾಂಗಗಳ ಮೇಲಿನ ಅಧಿಕಾರವನ್ನು ಆ ಮೃಗಕ್ಕೆ ಕೊಡ
ಲಾಯಿತು. 8ಲೋಕದಲ್ಲಿ ವಾಸಿಸುವ ಜನರೆಲ್ಲರೂ ಆ ಮೃಗ
ವನ್ನು ಆರಾಧಿಸುತ್ತಾರೆ. ಲೋಕವು ಆರಂಭಗೊಂಡಂದಿ
ನಿಂದಲೂ ಕುರಿಮರಿಯಾದಾತನ ಜೀವಬಾಧ್ಯರ ಪುಸ್ತಕದಲ್ಲಿ
ಯಾರ ಹೆಸರುಗಳನ್ನು ಬರೆದಿಲ್ಲವೊ ಅವರೇ ಈ ಜನರು.
ಕುರಿಮರಿಯಾದಾತನೇ ಕೊಲ್ಲಲ್ಪಟ್ಟವನು.
9ಇವುಗಳನ್ನು ಕೇಳುವವನು ಗಮನವಿಟ್ಟು ಆಲಿಸಲಿ:

10 ಸೆರೆಹಿಡಿಯುವವನು ಸೆರೆಗೆ ಹಾಕಲ್ಪಡಬೇಕು.
ಕತ್ತಿಯಿಂದ ಕೊಲ್ಲುವವನು ಕತ್ತಿಯಿಂದಲೇ
ಕೊಲ್ಲಲ್ಪಡಬೇಕು.
ಇದರ ಅರ್ಥವೇನಂದರೆ, ದೇವರ ಪರಿಶುದ್ಧ
ಜನರು ತಾಳ್ಮೆ ಮತ್ತು ನಂಬಿಕೆ ಉಳ್ಳವ
ರಾಗಿರಬೇಕು.

11ನಂತರ ಭೂಮಿಯಿಂದ ಹೊರಗೆ ಬರುತ್ತಿರುವ
ಮತ್ತೊಂದು ಮೃಗವನ್ನೂ ನಾನು ನೋಡಿದೆನು. ಅದಕ್ಕೆ ಟಗರಿ
ನಂತೆ ಎರಡು ಕೊಂಬುಗಳಿದ್ದವು, ಆದರೆ ಅದು ಘಟಸರ್ಪದಂತೆ
ಮಾತಾಡುತ್ತಿತ್ತು. 12ಈ ಮೃಗವು ಮೊದಲಿನ ಮೃಗದ ಎದುರಿ
ನಲ್ಲಿ ನಿಂತುಕೊಂಡು, ಮೊದಲಿನ ಮೃಗದ ಅಧಿಕಾರವನ್ನೇ
ಬಳಸುತ್ತದೆ. ಭೂಮಿಯ ಮೇಲೆ ವಾಸಿಸುವ ಜನರೆಲ್ಲರೂ
ಮೊದಲಿನ ಮೃಗವನ್ನು ಆರಾಧಿಸುವಂತೆ ಮಾಡಲು ಅದು ತನ್ನ
ಶಕ್ತಿಯನ್ನೆಲ್ಲಾ ಬಳಸುತ್ತದೆ. ಮರಣಕರವಾದ ಗಾಯದಿಂದ
ಗುಣಮುಖವಾದದ್ದೇ ಮೊದಲನೆಯ ಮೃಗ.
13ಈ ಎರಡನೆಯ ಮೃಗವು ಮಹಾ ಅದ್ಭುತಗಳನ್ನು
ಮಾಡುತ್ತದೆ. ಅದು ಜನರ ಕಣ್ಣೆದುರಿನಲ್ಲಿಯೇ ಬೆಂಕಿಯನ್ನು
ಆಕಾಶದಿಂದ ಭೂಮಿಗೆ ಸುರಿಸುತ್ತದೆ. 14ಈ ಎರಡನೆಯ
ಮೃಗವು ಭೂಮಿಯ ಮೇಲೆ ವಾಸಿಸುವ ಜನರನ್ನು ಮರುಳು
ಗೊಳಿಸುತ್ತದೆ. ಅದ್ಭುತಗಳನ್ನು ಮಾಡಲು ಅದಕ್ಕೆ ನೀಡಿರುವ ಶಕ್ತಿ
ಯಿಂದ ಅದು ಜನರನ್ನು ಮರುಳು ಮಾಡುತ್ತದೆ. ಮೊದಲನೆಯ
ಮೃಗದ ಸೇವೆಯನ್ನು ಮಾಡಲು ಅದು ಈ ಅದ್ಭುತಗಳನ್ನು
ಮಾಡುತ್ತದೆ. ಮೊದಲನೆಯ ಮೃಗಕ್ಕೆ ಗೌರವ ತೋರಲು
ವಿಗ್ರಹವನ್ನು ನಿರ್ಮಿಸುವಂತೆ ಅದು ಜನರಿಗೆ ಆಜ್ಞಾಪಿಸಿತು. ಕತ್ತಿ
ಯಿಂದ ಗಾಯಗೊಂಡಿದ್ದರೂ ಸಾಯದೆಹೋದ ಪ್ರಾಣಿಯೇ
ಇದು. 15ಮೊದಲನೆಯ ಮೃಗದ ವಿಗ್ರಹಕ್ಕೆ ಜೀವ ಬರುವಂತೆ
ಮಾಡುವ ಶಕ್ತಿಯನ್ನು ಎರಡನೆಯ ಮೃಗಕ್ಕೆ ಕೊಡಲಾಯಿತು.
ಆಗ ಆ ವಿಗ್ರಹಕ್ಕೆ ಮಾತಾಡುವ ಶಕ್ತಿ ಬಂದಿತು. ಅದು ತನ್ನನ್ನು
ಪೂಜಿಸದವರನ್ನೆಲ್ಲಾ ಕೊಲ್ಲುವುದಾಗಿ ಆಜ್ಞೆ ಹೊರಡಿಸಿತು.
16ಎರಡನೆಯ ಮೃಗವು ಸಹ ಎಲ್ಲರನ್ನು ಅಂದರೆ ಚಿಕ್ಕವರನ್ನು
ಮತ್ತು ದೊಡ್ಡವರನ್ನು, ಶ್ರೀಮಂತರನ್ನು, ಬಡವರನ್ನು,
ಗುಲಾಮರನ್ನು ಮತ್ತು ಸ್ವತಂತ್ರರನ್ನು, ತಮ್ಮ ಬಲಗೈಯ
ಮೇಲಾಗಲಿ ಅಥವಾ ತಮ್ಮ ಹಣೆಗಳ ಮೇಲಾಗಲಿ ಗುರುತು
ಹಾಕಿಕೊಳ್ಳಬೇಕೆಂದು ಒತ್ತಾಯಪಡಿಸಿತು. 17ಈ ಗುರುತಿಲ್ಲದೆ
ಯಾರೂ ಕೊಳ್ಳುವಂತಿಲ್ಲ, ಮತ್ತು ಮಾರುವಂತಿಲ್ಲ. ಈ
ಗುರುತು ಏನೆಂದರೆ ಆ ಮೃಗದ ಹೆಸರು ಅಥವಾ ಅದರ ಹೆಸರಿನ
ಸಂಖ್ಯೆ. 18ತಿಳುವಳಿಕೆಯುಳ್ಳ ಮನುಷ್ಯನು ಮೃಗದ ಸಂಖ್ಯೆಯ
ಅರ್ಥವನ್ನು ಕಂಡುಕೊಳ್ಳಲು ಸಾಧ್ಯ. ಇಲ್ಲಿ ಜ್ಞಾನದ ಅಗತ್ಯವಿದೆ.
ಈ ಸಂಖ್ಯೆಯು ಮನುಷ್ಯನ ಸಂಖ್ಯೆಯಾಗಿದೆ. ಅವನ ಸಂಖ್ಯೆ 666.

### ರಕ್ಷಣೆ ಹೊಂದಿದವರ ಉತ್ಸವ ಗೀತೆ

14 ನಂತರ ನಾನು ನೋಡಿದಾಗ, ನನ್ನ ಎದುರಿನಲ್ಲಿಯೇ
ಕುರಿಮರಿಯಾದಾತನು ಇದ್ದನು. ಆತನು ಸಿಯೋನ್
ಪರ್ವತದ ಮೇಲೆ ನಿಂತಿದ್ದನು. ಆತನ ಜೊತೆಯಲ್ಲಿ 1,44,000
ಜನರಿದ್ದರು. ಅವರ ಹಣೆಗಳ ಮೇಲೆ ಆತನ ಹೆಸರನ್ನು ಮತ್ತು
ಆತನ ತಂದೆಯ ಹೆಸರನ್ನು ಬರೆಯಲಾಗಿತ್ತು. 2ನಾನು
ಪರಲೋಕದಿಂದ ಒಂದು ಶಬ್ದವನ್ನು ಕೇಳಿಸಿಕೊಂಡೆನು. ಅದು
ನೀರಿನ ಪ್ರವಾಹದಂತೆ ಭೋರ್ಗರೆಯುವ ಶಬ್ದದಂತೆ ಮತ್ತು
ಗುಡುಗಿನ ಧ್ವನಿಯಂತೆ ಇದ್ದಿತು. ಜನರು ತಮ್ಮ ತಂತಿವಾದ್ಯ
ಗಳನ್ನು ಬಾರಿಸುತ್ತಿರುವರೋ ಎಂಬಂತೆ ಆ ಶಬ್ದವು ನನಗೆ
ಕೇಳಿಸಿತು. 3ಜನರು ಸಿಂಹಾಸನದ, ನಾಲ್ಕು ಜೀವಿಗಳ ಮತ್ತು
ಹಿರಿಯರ ಸನ್ನಿಧಿಯಲ್ಲಿ ಹೊಸ ಹಾಡನ್ನು ಹಾಡಿದರು. ಈ
ಲೋಕದಿಂದ ಬಿಡುಗಡೆ ಹೊಂದಿದ್ದ 1,44,000 ಜನರು ಮಾತ್ರ

ಈ ಹಾಡನ್ನು ಕಲಿಯಲು ಶಕ್ತರಾಗಿದ್ದರು. ಈ ಹಾಡನ್ನು ಬೇರೆ
ಯಾರೂ ಕಲಿಯಲಾಗುತ್ತಿರಲಿಲ್ಲ. 4ಇವರು ಸ್ತ್ರೀ ಸಹವಾಸದಿಂದ
ಮಲಿನರಾಗದೆ ಕನ್ನಿಕೆಯರಂತೆ ಉಳಿದಿದ್ದರು. ಕುರಿಮರಿಯಾ
ದಾತನು ಹೋದಕಡೆಯಲ್ಲೆಲ್ಲಾ ಆತನನ್ನೇ ಅವರು ಹಿಂಬಾ
ಲಿಸುತ್ತಾರೆ. ಭೂಲೋಕದ ಜನರ ಮಧ್ಯದಿಂದ ಬಿಡುಗಡೆ
ಹೊಂದಿದವರೇ 1,44,000 ಮಂದಿ. ದೇವರಿಗೂ ಕುರಿಮರಿ
ಯಾದಾತನಿಗೂ ಅರ್ಪಿತರಾದವರಲ್ಲಿ ಇವರೇ ಮೊದಲಿಗ
ರಾಗಿದ್ದರು. 5ಈ ಜನರು ಸುಳ್ಳುಗಾರರಾಗಿರಲಿಲ್ಲ. ಇವರು
ನಿರ್ದೋಷಿಗಳಾಗಿದ್ದರು.

### ಮೂರು ಮಂದಿ ದೇವದೂತರು

6ನಂತರ ಇನ್ನೊಬ್ಬ ದೇವದೂತನು ವಾಯುಮಂಡಲದಲ್ಲಿ
ಅತಿ ಎತ್ತರದಲ್ಲಿ ಹಾರುತ್ತಿರುವುದನ್ನು ನಾನು ನೋಡಿದೆನು.
ಭೂಮಿಯ ಮೇಲೆ ವಾಸಿಸುವ ಸಕಲ ಜನಾಂಗ, ಕುಲ ಪ್ರಜೆ,
ಭಾಷೆಗಳ ಜನರಿಗೆಲ್ಲಾ ಬೋಧಿಸುವುದಕ್ಕೆ ನಿತ್ಯವಾದ
ಸುವಾರ್ತೆಯು ಆ ದೇವದೂತನಲ್ಲಿತ್ತು. 7ಆ ದೇವದೂತನು
ಗಟ್ಟಿಯಾದ ಧ್ವನಿಯಲ್ಲಿ, ''ದೇವರಿಗೆ ಭಯಪಡಿರಿ. ಆತನನ್ನು
ಸ್ತುತಿಸಿರಿ. ಜನರಿಗೆಲ್ಲ ದೇವರು ತೀರ್ಪು ನೀಡುವ ಸಮಯವು
ಹತ್ತಿರ ಬಂದಿದೆ. ದೇವರನ್ನು ಆರಾಧಿಸಿರಿ. ಪರಲೋಕವನ್ನೂ
ಭೂಮಿಯನ್ನೂ ಸಮುದ್ರವನ್ನೂ ಮತ್ತು ನೀರಿನ ಬುಗ್ಗೆಗಳನ್ನೂ
ಸೃಷ್ಟಿಸಿದವನು ಆತನೇ'' ಎಂದು ಹೇಳಿದನು.
8ನಂತರ ಎರಡನೆಯ ದೇವದೂತನು ಮೊದಲನೆಯ ದೇವ
ದೂತನನ್ನು ಹಿಂಬಾಲಿಸುತ್ತಾ ''ಅವಳು ನಾಶವಾದಳು! ಬಾಬಿ
ಲೋನ್ ಎಂಬ ನಗರಿಯು ನಾಶವಾದಳು! ಆಕೆಯು ಸಕಲ
ಜನಾಂಗಗಳಿಗೆ ತನ್ನ ಜಾರತ್ವವೆಂಬ ಮತ್ತು ದೇವರ ಕೋಪವೆಂಬ
ದ್ರಾಕ್ಷಾರಸವನ್ನು ಕುಡಿಸಿದಳು'' ಎಂದು ಹೇಳಿದನು.
9ಮೂರನೆಯ ದೇವದೂತನು ಮೊದಲ ಇಬ್ಬರು ದೇವ
ದೂತರನ್ನು ಹಿಂಬಾಲಿಸಿದನು. ಈ ಮೂರನೆಯ ದೇವದೂತನು
ಗಟ್ಟಿಯಾದ ಧ್ವನಿಯಲ್ಲಿ ಹೀಗೆ ಹೇಳಿದನು: ಮೃಗವನ್ನೂ ಮೃಗದ
ವಿಗ್ರಹವನ್ನೂ ಆರಾಧಿಸುವವನಿಗೆ ಮತ್ತು ಮೃಗದ ಗುರುತನ್ನು
ಹಣೆಯ ಮೇಲಾಗಲಿ ಇಲ್ಲವೆ ತನ್ನ ಕೈಗಳ ಮೇಲಾಗಲಿ ಹಾಕಿಸಿ
ಕೊಳ್ಳುವವನಿಗೆ ಕೇಡಾಗುವುದು. 10ಅವನು ದೇವರ ಕೋಪ
ವೆಂಬ ದ್ರಾಕ್ಷಾರಸವನ್ನು ಕುಡಿಯುತ್ತಾನೆ. ದೇವರ ಕೋಪವೆಂಬ
ಬಟ್ಟಲಿನಲ್ಲಿ ಈ ದ್ರಾಕ್ಷಾರಸವನ್ನು ಅದರ ಪೂರ್ಣಶಕ್ತಿಯ
ಸಮೇತವಾಗಿ ತಯಾರಿಸಲಾಗಿದೆ. ಅವನನ್ನು ಪರಿಶುದ್ಧ
ದೇವದೂತರ ಮತ್ತು ಕುರಿಮರಿಯಾದಾತನ ಮುಂದೆ ಉರಿ
ಯುವ ಗಂಧಕದಿಂದ ಯಾತನೆಪಡಿಸಲಾಗುವುದು. 11ಅವರ
ಯಾತನೆಯೆಂಬ ಹೊಗೆಯು ಸದಾ ಏಳುತ್ತಲೇ ಇರುವುದು.
ಮೃಗವನ್ನು ಮತ್ತು ಅದರ ವಿಗ್ರಹವನ್ನು ಆರಾಧಿಸುವ ಮತ್ತು
ಅದರ ಹೆಸರನ್ನು ಗುರುತುಹಾಕಿಸಿಕೊಳ್ಳುವ ಜನರಿಗೆ ಹಗಲಲ್ಲೂ
ರಾತ್ರಿಯಲ್ಲೂ ವಿಶ್ರಾಂತಿಯೆಂಬುದೇ ಇರುವುದಿಲ್ಲ.'' 12ಈ
ಪರಿಸ್ಥಿತಿಯಲ್ಲಿ, ದೇವರ ಪರಿಶುದ್ಧ ಜನರು ತಾಳ್ಮೆಯಿಂದಿರ
ಬೇಕು. ಅವರು ದೇವರ ಆಜ್ಞೆಗಳಿಗೆ ವಿಧೇಯರಾಗಿರಬೇಕು
ಮತ್ತು ಯೇಸುವಿನಲ್ಲಿ ನಂಬಿಕೆಯನ್ನಿಟ್ಟಿರಬೇಕು. 13ನಂತರ
ನಾನು ಪರಲೋಕದಿಂದ ಒಂದು ಧ್ವನಿಯನ್ನು ಕೇಳಿದೆನು. ಆ
ಧ್ವನಿಯು ಹೀಗೆ ಹೇಳಿತು: ''ಇದನ್ನು ಬರೆ: ಇಂದಿನಿಂದ
ಪ್ರಭುವಿನ ಭಕ್ತರಾಗಿದ್ದು ಸಾಯುವಂತಹ ಜನರು ಧನ್ಯರು.''

''ಹೌದು, ಇದು ನಿಜ. ಆ ಜನರು ತಮ್ಮ ಪ್ರಯಾಸದ
ಕೆಲಸವನ್ನು ಮುಗಿಸಿದವರಾಗಿ ವಿಶ್ರಾಂತಿ ಪಡೆಯುತ್ತಾರೆ. ಅವರು
ಮಾಡಿದುದೆಲ್ಲವೂ ಅವರೊಂದಿಗೇ ಇರುತ್ತದೆ'' ಎಂದು
ಪವಿತ್ರಾತ್ಮನು ಹೇಳುತ್ತಾನೆ.

### ಭೂಲೋಕದ ಸುಗ್ಗಿಕಾಲ

14ನಾನು ನೋಡಿದಾಗ ನನ್ನ ಎದುರಿನಲ್ಲಿ ಮನುಷ್ಯ
ಕುಮಾರನಂತೆ* ಕಾಣುತ್ತಿದ್ದವನು ಆ ಬಿಳಿಯ ಮೋಡದ
ಮೇಲೆ ಕುಳಿತಿದ್ದನು. ಆತನ ತಲೆಯ ಮೇಲೆ ಚಿನ್ನದ ಕಿರೀಟವಿತ್ತು
ಮತ್ತು ಆತನ ಕೈಯಲ್ಲಿ ಹರಿತವಾದ ಕುಡುಗೋಲಿತ್ತು. 15ಆಗ
ಮತ್ತೊಬ್ಬ ದೇವದೂತನು ಆಲಯದಿಂದ ಹೊರಗೆ ಬಂದನು.
ಈ ದೇವದೂತನು ಮೋಡದ ಮೇಲೆ ಕುಳಿತಿರುವಾತನಿಗೆ, ''ನಿನ್ನ
ಕುಡುಗೋಲನ್ನು ತೆಗೆದುಕೊಂಡು ಭೂಮಿಯಿಂದ ಒಟ್ಟು
ಗೂಡಿಸು. ಸುಗ್ಗಿಯ ಕಾಲವು ಬಂದಿದೆ. ಭೂಮಿಯ ಫಸಲು
ಮಾಗಿದೆ'' ಎಂದು ಹೇಳಿದನು. 16ಆದ್ದರಿಂದ ಮೋಡದ ಮೇಲೆ
ಕುಳಿತಿದ್ದಾತನು ಕುಡುಗೋಲನ್ನು ಭೂಮಿಯ ಮೇಲೆ ಬೀಸಿ
ದನು. ಆಗ ಭೂಮಿಯ ಪೈರು ಕೊಯ್ಯಲ್ಪಟ್ಟಿತು.
17ನಂತರ ಮತ್ತೊಬ್ಬ ದೇವದೂತನು ಪರಲೋಕದ ಆಲಯ
ದಿಂದ ಹೊರಗೆ ಬಂದನು. ಆ ದೇವದೂತನಲ್ಲಿಯೂ ಹರಿತ
ವಾದ ಒಂದು ಕುಡುಗೋಲಿತ್ತು. 18ನಂತರ ಮತ್ತೊಬ್ಬ ದೇವ
ದೂತನು ಯಜ್ಞವೇದಿಕೆಯಿಂದ ಬಂದನು. ಅವನಿಗೆ ಬೆಂಕಿಯ
ಮೇಲೆ ಅಧಿಕಾರವಿತ್ತು. ಅವನು ಹರಿತವಾದ ಕುಡುಗೋಲಿದ್ದ
ದೇವದೂತನನ್ನು ಕರೆದು, ''ನಿನ್ನ ಹರಿತವಾದ ಕುಡುಗೋಲನ್ನು
ತೆಗೆದುಕೊಂಡು, ಭೂಮಿಯ ದ್ರಾಕ್ಷಿ ತೋಟದಿಂದ ದ್ರಾಕ್ಷಿ
ಗೊಂಚಲುಗಳನ್ನು ಒಟ್ಟುಗೂಡಿಸು. ಭೂಮಿಯ ದ್ರಾಕ್ಷಿಯೆಲ್ಲಾ
ಮಾಗಿವೆ'' ಎಂದು ಹೇಳಿದನು. 19ಆ ದೇವದೂತನು ತನ್ನ
ಕುಡುಗೋಲನ್ನು ಭೂಮಿಯ ಮೇಲೆ ಬೀಸಿ, ದ್ರಾಕ್ಷಿಯನ್ನೆಲ್ಲಾ
ಒಟ್ಟುಗೂಡಿಸಿ, ದೇವರ ಕೋಪವೆಂಬ ದ್ರಾಕ್ಷಿಯ ಆಲೆಗೆ
ಎಸೆದನು. 20ಆ ದ್ರಾಕ್ಷಿಯನ್ನು ನಗರದ ಹೊರಭಾಗದಲ್ಲಿದ್ದ
ದ್ರಾಕ್ಷಿಯ ಆಲೆಯಲ್ಲಿ ಕಿವುಚಿ ಹಾಕಿದರು. ಆ ದ್ರಾಕ್ಷಿಯ
ಆಲೆಯಿಂದ ರಕ್ತವು ಹೊರಕ್ಕೆ ಬಂದಿತು. ಅದು ಕುದುರೆಗಳ
ತಲೆಗಳಷ್ಟು ಎತ್ತರಕ್ಕೆ ಏರಿ ಇನ್ನೂರು ಮೈಲಿಗಳಷ್ಟು ದೂರ
ಹರಿಯಿತು.

### ದೇವದೂತರಿಂದ ಕೊನೆಯ ಉಪದ್ರವಗಳು

15 ನಂತರ ಪರಲೋಕದಲ್ಲಿ ಮತ್ತೊಂದು ಅದ್ಭುತವನ್ನು
ನಾನು ನೋಡಿದೆನು. ಅದು ಮಹಾ ಆಶ್ಚರ್ಯಕರ
ವಾಗಿತ್ತು. ಏಳು ಉಪದ್ರವಗಳನ್ನು ತರುವ ಏಳು ಮಂದಿ ದೇವ
ದೂತರು ಅಲ್ಲಿದ್ದರು. ದೇವರ ಕೋಪವು ಈ ಉಪದ್ರವ
ಗಳೊಂದಿಗೆ ಮುಗಿಯುತ್ತಿದ್ದುದರಿಂದ ಇವು ಕಡೆಯ ಉಪದ್ರವ
ಗಳಾಗಿದ್ದವು.
2ಬೆಂಕಿಯನ್ನು ಬೆರಸಿದ ಗಾಜಿನ ಸಮುದ್ರದಂತೆ ಕಾಣಿಸುವ
ಏನೋ ಒಂದು ನನಗೆ ಕಾಣಿಸಿತು. ಮೃಗವನ್ನು, ಅದರ ವಿಗ್ರಹ
ವನ್ನು ಮತ್ತು ಅದರ ಹೆಸರಿನ ಸಂಖ್ಯೆಯನ್ನು ಸೋಲಿಸಿ ಜಯ

**ಮನುಷ್ಯಕುಮಾರನಂತೆ** ಇದು ಯೇಸುಕ್ರಿಸ್ತನಿಗೆ ಕೊಡಲ್ಪಟ್ಟಿರುವ ಹೆಸರು. ಸಾಮಾನ್ಯವಾಗಿ ಯೇಸುಕ್ರಿಸ್ತನು ಸ್ವತಃ ತನ್ನನ್ನೇ ಕುರಿತು ಈ ಪದವನ್ನು ಉಪಯೋಗಿಸುತ್ತಾನೆ. ದಾನಿಯೇಲ 7:13-14.

ಗಳಿಸಿದವರೆಲ್ಲರೂ ಸಮುದ್ರ ತೀರದಲ್ಲಿ ನಿಂತಿದ್ದರು. ದೇವರು
ಅವರಿಗೆ ನೀಡಿದ ತಂತಿವಾದ್ಯಗಳು ಅವರಲ್ಲಿದ್ದವು.
3ಅವರು ದೇವರ ಸೇವಕನಾದ ಮೋಶೆಯ ಗೀತೆಯನ್ನು
ಮತ್ತು ಕುರಿಮರಿಯಾದಾತನ ಗೀತೆಯನ್ನು ಹಾಡಿದರು:

‘‘ಪ್ರಭುವೇ, ಸರ್ವಶಕ್ತನಾದ ದೇವರೇ, ನೀನು
ಮಹತ್ತಾದ ಕಾರ್ಯಗಳನ್ನೂ ಆಶ್ಚರ್ಯಕರವಾದ
ಕಾರ್ಯಗಳನ್ನೂ ಮಾಡುವೆ, ಸರ್ವಜನಾಂಗಗಳ
ರಾಜನೇ, ನಿನ್ನ ಮಾರ್ಗವೆಲ್ಲವೂ ನ್ಯಾಯವೂ
ಸತ್ಯವೂ ಆಗಿವೆ.
4 ಪ್ರಭುವೇ, ಜನರೆಲ್ಲರೂ ನಿನಗೆ ಭಯಗೊಳ್ಳು
ತ್ತಾರೆ; ಜನರೆಲ್ಲರೂ ನಿನ್ನ ಹೆಸರನ್ನು ಸ್ತುತಿಸುತ್ತಾರೆ.
ನೀನು ಮಾತ್ರ ಪರಿಶುದ್ಧನಾದವನು. ನೀನು
ಯೋಗ್ಯವಾದ ಕಾರ್ಯಗಳನ್ನು ಮಾಡುತ್ತೀ
ಎಂಬುದು ಸ್ಪಷ್ಟವಾಗಿರುವುದರಿಂದ ಜನರೆಲ್ಲರೂ
ನಿನ್ನ ಸನ್ನಿಧಿಗೆ ಬಂದು ನಿನ್ನನ್ನು ಆರಾಧಿಸುತ್ತಾರೆ.’’

5ಇದಾದ ನಂತರ ನಾನು ನೋಡಿದಾಗ ಪರಲೋಕದ
ಆಲಯವು (ಸಾಕ್ಷಿಯ ಗುಡಾರವು) ತೆರೆಯಿತು. 6ಏಳು ಉಪ
ದ್ರವಗಳನ್ನು ತರುವ ಏಳು ಮಂದಿ ದೇವದೂತರು ಆಲಯದಿಂದ
ಹೊರಗೆ ಬಂದರು. ಅವರು ಶುಭ್ರವಾದ ಮತ್ತು ಪ್ರಕಾಶ
ಮಾನವಾದ ನಾರುಮಡಿಯನ್ನು ಧರಿಸಿದ್ದರು. ಅವರು ಎದೆಯ
ಸುತ್ತಲೂ ಚಿನ್ನದ ಪಟ್ಟಿಗಳನ್ನು ಕಟ್ಟಿಕೊಂಡಿದ್ದರು. 7ನಾಲ್ಕು
ಜೀವಿಗಳಲ್ಲಿ ಒಂದು ಈ ಏಳು ದೇವದೂತರಿಗೆ ಏಳು ಚಿನ್ನದ
ಪಾತ್ರೆಗಳನ್ನು ನೀಡಿತು. ಯುಗಯುಗಾಂತರಗಳಲ್ಲಿಯೂ ಜೀವಿ
ಸುವ ದೇವರ ಕೋಪದಿಂದ ಈ ಪಾತ್ರೆಗಳು ತುಂಬಿದ್ದವು.
8ದೇವರ ವೈಭವ ಮತ್ತು ಶಕ್ತಿಯ ಹೊಗೆಯಿಂದ ಆಲಯವು
ತುಂಬಿಹೋಯಿತು. ಏಳು ದೇವದೂತರ ಏಳು ಉಪದ್ರವಗಳು
ಮುಗಿಯುವ ತನಕ ಆಲಯದಲ್ಲಿ ಪ್ರವೇಶಿಸಲು ಯಾರಿಗೂ
ಸಾಧ್ಯವಿರಲಿಲ್ಲ.

### ದೇವರ ಕೋಪದಿಂದ ತುಂಬಿದ ಪಾತ್ರೆಗಳು

16 ನಂತರ ಆಲಯದಿಂದ ಒಂದು ಮಹಾಶಬ್ದವು ನನಗೆ
ಕೇಳಿಸಿತು. ಆ ಶಬ್ದವು ಏಳು ದೇವದೂತರಿಗೆ, ‘‘ನೀವು
ಹೋಗಿ ಏಳು ಪಾತ್ರೆಗಳಲ್ಲಿರುವ ದೇವರ ಕೋಪವನ್ನು
ಭೂಮಿಯ ಮೇಲೆ ಸುರಿದು ಬಿಡಿ’’ ಎಂದು ಹೇಳಿತು.
2ಮೊದಲನೆಯ ದೇವದೂತನು ಹೊರಟನು. ಅವನು ತನ್ನ
ಪಾತ್ರೆಯಲ್ಲಿದ್ದುದನ್ನು ಭೂಮಿಯ ಮೇಲೆ ಸುರಿದನು. ಆಗ
ಮೃಗದ ಗುರುತನ್ನು ಹೊಂದಿದ್ದ ಮತ್ತು ಅದರ ವಿಗ್ರಹವನ್ನು
ಆರಾಧಿಸುತ್ತಿದ್ದ ಜನರೆಲ್ಲರಿಗೂ ಅಸಹ್ಯವಾದ ಹಾಗೂ ನೋವಿ
ನಿಂದ ಕೂಡಿದ ಹುಣ್ಣುಗಳಾದವು.
3ಎರಡನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು
ಸಮುದ್ರದ ಮೇಲೆ ಸುರಿದನು. ಆಗ ಸಮುದ್ರವು ಸತ್ತ ಮನುಷ್ಯನ
ರಕ್ತದಂತಾಯಿತು. ಆ ಸಮುದ್ರದಲ್ಲಿದ್ದ ಜೀವಜಂತುಗಳೆಲ್ಲ ಸತ್ತು
ಹೋದವು. 4ಮೂರನೆಯ ದೇವದೂತನು ತನ್ನ ಪಾತ್ರೆಯಲ್ಲಿ
ದ್ದುದನ್ನು ನದಿಗಳ ಮತ್ತು ನೀರಿನ ಬುಗ್ಗೆಗಳ ಮೇಲೆ ಸುರಿದನು.
ಆಗ ನದಿಗಳು ಮತ್ತು ನೀರಿನ ಬುಗ್ಗೆಗಳೆಲ್ಲ ರಕ್ತವಾಗಿ
ಪರಿಣಮಿಸಿದವು. 5ಆಗ ನೀರಿನ ಅಧಿಪತಿಯಾದ ದೂತನು
ದೇವರಿಗೆ ಹೇಳಿದ್ದು ನನಗೆ ಕೇಳಿಸಿತು:

‘‘ನೀನೇ ವರ್ತಮಾನ ಕಾಲದಲ್ಲಿರುವಾತನು.
ನೀನೊಬ್ಬನೇ ಪರಿಶುದ್ಧನು. ನೀನು ನೀಡಿದ ಈ
ತೀರ್ಪುಗಳೆಲ್ಲಾ ನೀನು ನ್ಯಾಯವಂತ
ನಾಗಿರುವೆ.
6 ಆ ಜನರು ನಿನ್ನ ಪರಿಶುದ್ಧ ಜನರ ಮತ್ತು ನಿನ್ನ
ಪ್ರವಾದಿಗಳ ರಕ್ತವನ್ನು ಸುರಿಸಿದರು. ಈಗ ನೀನು
ಅವರಿಗೆ ಕುಡಿಯಲು ರಕ್ತವನ್ನೇ ನೀಡಿರುವೆ.
ಅವರು ಇದಕ್ಕೆ ಪಾತ್ರರಾಗಿದ್ದಾರೆ.’’

7ಯಜ್ಞವೇದಿಕೆಯಿಂದ ಹೀಗೆ ಹೇಳುವುದನ್ನೂ ನಾನು
ಕೇಳಿಸಿಕೊಂಡೆನು:

‘‘ಹೌದು, ಪ್ರಭುವೇ, ಸರ್ವಶಕ್ತನಾದ ದೇವರೇ,
ನಿನ್ನ ತೀರ್ಪುಗಳೆಲ್ಲಾ ಸತ್ಯವಾಗಿವೆ ಮತ್ತು
ನ್ಯಾಯವಾಗಿವೆ.’’

8ನಾಲ್ಕನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು
ಸೂರ್ಯನ ಮೇಲೆ ಸುರಿದನು. ಜನರನ್ನು ಕಡುಬಿಸಿಲಿನಿಂದ
ಕಂದಿಸುವ ಅಧಿಕಾರವನ್ನು ಸೂರ್ಯನಿಗೆ ಕೊಡಲಾಯಿತು.
9ಜನರು ಕಡುಬಿಸಿಲಿನಿಂದ ಕಂದಿಹೋಗಿ ದೇವರ ಹೆಸರನ್ನು
ಶಪಿಸಿದರು. ಈ ಉಪದ್ರವಗಳನ್ನು ದೇವರೊಬ್ಬನೇ ನಿಯಂತ್ರಿಸ
ಬಲ್ಲವನಾಗಿದ್ದಾನೆ. ಆದರೆ ಜನರು ತಮ್ಮ ಹೃದಯಗಳನ್ನೂ
ಜೀವಿತಗಳನ್ನೂ ಪರಿವರ್ತಿಸಿಕೊಳ್ಳಲಿಲ್ಲ. ದೇವರನ್ನು ಮಹಿಮೆ
ಪಡಿಸಲು ಒಪ್ಪಿಕೊಳ್ಳಲಿಲ್ಲ.
10ಐದನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಆ
ಮೃಗದ ಸಿಂಹಾಸನದ ಮೇಲೆ ಸುರಿದನು. ಮೃಗದ ರಾಜ್ಯದಲ್ಲಿ
ಅಂಧಕಾರವು ಕವಿಯಿತು. ಜನರು ನೋವಿನಿಂದ ತಮ್ಮ
ನಾಲಿಗೆಗಳನ್ನು ಕಚ್ಚಿಕೊಂಡರು. 11ಜನರು ತಮಗಾದ ಹುಣ್ಣು
ಗಳಿಂದ ಮತ್ತು ನೋವಿನಿಂದ ಪರಲೋಕದ ದೇವರನ್ನು
ದೂಷಿಸಿದರು. ಆದರೆ ಜನರು ತಾವು ಮಾಡುವ ಕೆಟ್ಟ ಕಾರ್ಯ
ಗಳನ್ನು ತೊರೆದುಬಿಟ್ಟು ತಮ್ಮ ಹೃದಯಗಳನ್ನು ಮಾರ್ಪಡಿಸಿ
ಕೊಳ್ಳಲು ಒಪ್ಪಲಿಲ್ಲ. 12ದೇವದೂತನು ತನ್ನ ಪಾತ್ರೆಯಲ್ಲಿ
ದ್ದುದನ್ನು ಯೂಫ್ರೆಟಿಸ್ ಮಹಾನದಿಯ ಮೇಲೆ ಸುರಿಸಿದನು.
ನದಿಯಲ್ಲಿದ್ದ ನೀರು ಬತ್ತಿಹೋಯಿತು. ಇದರಿಂದ ಪೂರ್ವ
ದಲ್ಲಿದ್ದ ರಾಜರುಗಳು ಬರಲು ಮಾರ್ಗವು ಸಿದ್ಧವಾಯಿತು.
13ಆಗ ಕಪ್ಪೆಗಳಂತಿದ್ದ ಮೂರು ಅಶುದ್ಧಾತ್ಮಗಳನ್ನು ನಾನು
ನೋಡಿದೆನು. ಅವು ಘಟಸರ್ಪದ ಬಾಯಿಂದ, ಮೃಗದ
ಬಾಯಿಂದ ಮತ್ತು ಸುಳ್ಳು ಪ್ರವಾದಿಯ ಬಾಯಿಂದ ಹೊರಗೆ
ಬಂದವು. 14ಈ ಅಶುದ್ಧಾತ್ಮಗಳು ಸೈತಾನನ ಆತ್ಮಗಳಾಗಿವೆ.
ಅವುಗಳಿಗೆ ಮಹಾ ಅದ್ಭುತಗಳನ್ನು ಮಾಡಲು ಶಕ್ತಿಯಿದೆ. ಈ
ಅಶುದ್ಧಾತ್ಮಗಳು ಸರ್ವಶಕ್ತನಾದ ದೇವರ ಮಹಾದಿನದಂದು
ನಡೆಯುವ ಯುದ್ಧಕ್ಕೆ ಲೋಕದಲ್ಲೆಲ್ಲಾ ಇರುವ ರಾಜರನ್ನು
ಒಟ್ಟುಗೂಡಿಸಲು ಹೊರಗೆ ಹೋಗುತ್ತವೆ.
15‘‘ಕೇಳಿರಿ! ನಾನು ಕಳ್ಳನಂತೆ ಬರುತ್ತೇನೆ. ಎಚ್ಚರವಾಗಿದ್ದು
ತನ್ನ ಬಟ್ಟೆಗಳನ್ನು ಕಾಪಾಡಿಕೊಳ್ಳುವವನು ಭಾಗ್ಯವಂತ
ನಾಗಿದ್ದಾನೆ. ಆಗ ಅವನು ನಗ್ನನಾಗಿ ಹೊರಗೆ ಹೋಗಿ ತನ್ನನ್ನು
ನಾಚಿಕೆಗೆ ಗುರಿಪಡಿಸಿಕೊಳ್ಳುವ ಅಗತ್ಯತೆ ಇರುವುದಿಲ್ಲ.’’

16ಬಳಿಕ ಅಶುದ್ಧಾತ್ಮಗಳು ರಾಜರುಗಳನ್ನು ಹೀಬ್ರೂ ಭಾಷೆ
ಯಲ್ಲಿ ಹರ್ಮೆಗದೋನ್ ಎಂಬ ಹೆಸರುಳ್ಳ ಸ್ಥಳದಲ್ಲಿ ಒಟ್ಟಾಗಿ
ಸೇರಿಸಿದವು.
17ಏಳನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಗಾಳಿ
ಯಲ್ಲಿ ಸುರಿದನು. ಆಗ ಒಂದು ಮಹಾಧ್ವನಿಯು ಸಿಂಹಾಸನ
ದಿಂದ ಆಲಯದ ಹೊರಕ್ಕೆ ಬಂದಿತು. ಆ ಧ್ವನಿಯು, ‘‘ಅದು
ಮುಗಿದು ಹೋಯಿತು!’’ ಎಂದು ಹೇಳಿತು. 18ಆಗ ಮಿಂಚು
ಗಳೂ ವಾಣಿಗಳೂ ಗುಡುಗುಗಳೂ ಉಂಟಾದವು ಮತ್ತು
ಭೂಕಂಪವೂ ಆಯಿತು. ಜನರು ಭೂಮಿಯ ಮೇಲೆ ಇರಲು
ಆರಂಭಿಸಿದಂದಿನಿಂದ ಅಂತಹ ಭೀಕರ ಭೂಕಂಪವು ಎಂದೂ
ಸಂಭವಿಸಿರಲಿಲ್ಲ. 19ಆ ಮಹಾನಗರವು ಒಡೆದು ಮೂರು
ಭಾಗವಾಯಿತು. ಜನಾಂಗಗಳ ನಗರಗಳು ನಾಶವಾದುವು.
ಮಹಾ ನಗರವಾದ ಬಾಬಿಲೋನನ್ನು ದೇವರು ದಂಡಿಸದೆ
ಬಿಡಲಿಲ್ಲ. ಅವನು ತನ್ನ ಉಗ್ರಕೋಪವೆಂಬ ದ್ರಾಕ್ಷಾರಸದಿಂದ
ತುಂಬಿದ ಪಾತ್ರೆಯನ್ನು ಆ ನಗರಕ್ಕೆ ಕುಡಿಯಲು ಕೊಟ್ಟನು.
20ಸಕಲ ದ್ವೀಪಗಳೂ ಅದೃಶ್ಯವಾದುವು ಮತ್ತು ಬೆಟ್ಟಗಳೇ ಇಲ್ಲ
ವಾದವು. 21ಆಕಾಶದಿಂದ ಮನುಷ್ಯರ ಮೇಲೆ ದೊಡ್ಡ ಆಲಿಕಲ್ಲು
ಗಳು ಬಿದ್ದವು. ಆ ಆಲಿಕಲ್ಲುಗಳು ನೂರು ಪೌಂಡುಗಳಷ್ಟು
ಭಾರವಾಗಿದ್ದವು. ಈ ಉಪದ್ರವದ ಕಾಟದಿಂದ ಜನರು ದೇವ
ರನ್ನು ದೂಷಿಸಿದರು. ಈ ಉಪದ್ರವವು ಬಹಳ ಭೀಕರವಾಗಿತ್ತು.

## ಮೃಗದ ಮೇಲಿದ್ದ ಸ್ತ್ರೀ

17 ಏಳು ಮಂದಿ ದೇವದೂತರಲ್ಲಿ ಒಬ್ಬನು ಬಂದು ನನ್ನ
ಸಂಗಡ ಮಾತನಾಡಿದನು. ಏಳು ಪಾತ್ರೆಗಳನ್ನು
ಹೊಂದಿದ್ದವರಲ್ಲಿ ಇವನೂ ಒಬ್ಬನಾಗಿದ್ದನು. ಆ ದೇವದೂತನು,
‘‘ಬಾ, ಪ್ರಸಿದ್ಧಳಾದ ವೇಶ್ಯಾಸ್ತ್ರೀಗೆ ನೀಡುವ ದಂಡನೆಯನ್ನು
ನಾನು ನಿನಗೆ ತೋರಿಸುತ್ತೇನೆ. ಅನೇಕ ನೀರುಗಳ ಮೇಲೆ
ಕುಳಿತುಕೊಂಡಿರುವವಳು ಅವಳೇ. 2ಲೋಕದ ರಾಜರುಗಳು
ಅವಳೊಂದಿಗೆ ಲೈಂಗಿಕ ಪಾಪ ಮಾಡಿದರು. ಲೋಕದ ಜನರು
ಅವಳ ಲೈಂಗಿಕ ಪಾಪವೆಂಬ ದ್ರಾಕ್ಷಾರಸವನ್ನು ಕುಡಿದು
ಮತ್ತರಾದರು’’ ಎಂದು ಹೇಳಿದನು.
3ಬಳಿಕ ದೇವದೂತನು ಪವಿತ್ರಾತ್ಮವಶನಾದ ನನ್ನನ್ನು
ಎತ್ತಿಕೊಂಡು ಮರಳುಗಾಡಿಗೆ ಹೋದನು. ಅಲ್ಲಿ ಒಬ್ಬ ಸ್ತ್ರೀಯು
ಕೆಂಪು ಮೃಗದ ಮೇಲೆ ಕುಳಿತಿರುವುದನ್ನು ನಾನು ನೋಡಿದೆನು.
ಮೃಗದ ಮೈ ಮೇಲೆಲ್ಲಾ ದೇವದೂಷಣೆಯ ಹೆಸರುಗಳು
ಬರೆದಿದ್ದವು. ಆ ಪ್ರಾಣಿಗೆ ಏಳು ತಲೆಗಳೂ ಹತ್ತು ಕೊಂಬುಗಳೂ
ಇದ್ದವು. 4ಆ ಸ್ತ್ರೀಯು ಧೂಮ್ರವರ್ಣದ ಮತ್ತು ಕೆಂಪು ಬಣ್ಣದ
ಬಟ್ಟೆಗಳನ್ನು ಧರಿಸಿದ್ದಳು. ಅವಳು ತಾನು ತೊಟ್ಟಿದ್ದ ಚಿನ್ನ, ರತ್ನ,
ಮುತ್ತು, ಮುಂತಾದವುಗಳಿಂದ ಪ್ರಕಾಶಿಸುತ್ತಿದ್ದಳು. ಅವಳು ತನ್ನ
ಕೈಯಲ್ಲಿ ಚಿನ್ನದ ಬಟ್ಟಲನ್ನು ಹಿಡಿದಿದ್ದಳು. ಆ ಬಟ್ಟಲು
ಅಸಹ್ಯವಾದವುಗಳಿಂದ ಮತ್ತು ಅವಳ ಲೈಂಗಿಕ ಪಾಪಗಳ
ಅಶುದ್ಧತೆಯಿಂದ ತುಂಬಿಹೋಗಿತ್ತು. 5ಅವಳ ಹಣೆಯ ಮೇಲೆ
ಒಂದು ಬರಹವನ್ನು ಬರೆದಿತ್ತು. ಆ ಬರಹಕ್ಕೆ ಗೂಢಾರ್ಥವಿತ್ತು.
ಅಲ್ಲಿ ಬರೆದಿದ್ದುದು ಹೀಗಿತ್ತು:

‘‘ಬಾಬಿಲೋನ್ ಎಂಬ ಮಹಾನಗರಿಯು
ಭೂಮಿಯಲ್ಲಿರುವ ಕೆಟ್ಟಕಾರ್ಯಗಳಿಗೆ ಮತ್ತು
ಜಾರ ಸ್ತ್ರೀಯರಿಗೆ ತಾಯಿ.’’

6ಆ ಸ್ತ್ರೀಯು ಕುಡಿದು ಮತ್ತಳಾಗಿರುವುದನ್ನು ನಾನು
ನೋಡಿದೆನು. ಅವಳು ದೇವರ ಪರಿಶುದ್ಧ ಜನರ ರಕ್ತವನ್ನು
ಕುಡಿದು ಮತ್ತಳಾಗಿದ್ದಳು. ಯೇಸುವಿನಲ್ಲಿ ತಮಗಿರುವ ನಂಬಿಕೆ
ಯ ಕುರಿತಾಗಿ ತಿಳಿಸಿದ ಜನರ ರಕ್ತವನ್ನು ಅವಳು ಕುಡಿದು
ಮತ್ತಳಾಗಿದ್ದಳು.
ಆ ಸ್ತ್ರೀಯನ್ನು ನಾನು ನೋಡಿದಾಗ ನನಗೆ ತುಂಬಾ ಆಶ್ಚರ್ಯ
ವಾಯಿತು. 7ಆಗ ದೇವದೂತನು ನನಗೆ, ‘‘ನೀನೇಕೆ ಆಶ್ಚರ್ಯ
ಗೊಂಡೆ? ಈ ಸ್ತ್ರೀಯ ಗೂಢಾರ್ಥವನ್ನು ಮತ್ತು ಈಕೆ ಸವಾರಿ
ಮಾಡುತ್ತಿರುವ ಏಳು ತಲೆಗಳನ್ನು ಮತ್ತು ಹತ್ತು ಕೊಂಬುಗಳನ್ನು
ಹೊಂದಿರುವ ಪ್ರಾಣಿಯ ಗೂಢಾರ್ಥವನ್ನು ನಾನು ನಿನಗೆ
ಹೇಳುತ್ತೇನೆ. 8ನೀನು ನೋಡಿದ ಆ ಮೃಗವು ಒಂದು ಕಾಲದಲ್ಲಿ
ಜೀವಿಸಿತ್ತು. ಆದರೆ ಈಗ ಆ ಮೃಗವು ಜೀವಂತವಾಗಿಲ್ಲ. ಆದರೆ
ಆ ಮೃಗವು ತಳವಿಲ್ಲದ ಕೂಪದಿಂದ ಜೀವಂತವಾಗಿ ಮೇಲೆದ್ದು
ಬಂದು ನಾಶವಾಗುವುದು. ಲೋಕದಲ್ಲಿ ಜೀವಿಸುತ್ತಿರುವ
ಜನರು ಆ ಮೃಗವನ್ನು ನೋಡಿದಾಗ ಆಶ್ಚರ್ಯಪಡುವರು.
ಅದು ಒಂದು ಕಾಲದಲ್ಲಿ ಜೀವಂತವಾಗಿದ್ದು, ಈಗ ಇಲ್ಲ
ವಾಗಿದ್ದು, ಮತ್ತೆ ಬರುವುದರಿಂದ ಅವರು ಆಶ್ಚರ್ಯಪಡುವರು.
ಲೋಕವು ಸೃಷ್ಟಿಯಾದಂದಿನಿಂದ ಜೀವ ಬಾಧ್ಯರ ಪುಸ್ತಕದಲ್ಲಿ
ಈ ಜನರ ಹೆಸರುಗಳನ್ನು ಬರೆದೇ ಇಲ್ಲ.
9‘‘ಇದನ್ನು ಅರ್ಥಮಾಡಿಕೊಳ್ಳಲು ನಿನಗೆ ಬುದ್ಧಿಶಕ್ತಿ ಬೇಕು.
ಆ ಮೃಗದ ಏಳು ತಲೆಗಳೇ ಆ ಸ್ತ್ರೀಯು ಕುಳಿತುಕೊಳ್ಳುವ ಏಳು
ಬೆಟ್ಟಗಳಾಗಿವೆ. ಅವು ಏಳು ಮಂದಿ ರಾಜರುಗಳೂ ಆಗಿವೆ.
10ಐದು ಮಂದಿ ರಾಜರುಗಳು ಈಗಾಗಲೇ ಸತ್ತಿದ್ದಾರೆ. ಒಬ್ಬ
ರಾಜನು ಮಾತ್ರ ಈಗ ಜೀವಿಸಿದ್ದಾನೆ, ಕೊನೆಯ ರಾಜನು
ಬರುತ್ತಾನೆ. ಅವನು ಬಂದು ಸ್ವಲ್ಪಕಾಲ ಮಾತ್ರ ಇರುತ್ತಾನೆ.
11ಒಂದು ಕಾಲದಲ್ಲಿ ಜೀವಿಸಿದ್ದು, ಆದರೆ ಈಗ ಜೀವಿಸಿಲ್ಲದ ಈ
ಮೃಗವು ಎಂಟನೆಯ ರಾಜ. ಈ ಎಂಟನೆಯ ರಾಜನೂ ಮೊದಲ
ಏಳು ರಾಜರುಗಳ ಗುಂಪಿಗೆ ಸೇರಿದವನು. ಅವನೂ ನಾಶ
ವಾಗುತ್ತಾನೆ.
12‘‘ನೀನು ನೋಡಿದ ಹತ್ತು ಕೊಂಬುಗಳೇ ಹತ್ತು ರಾಜರು
ಗಳಾಗಿವೆ. ಈ ಹತ್ತು ರಾಜರುಗಳು ಇನ್ನೂ ತಮ್ಮ ರಾಜ್ಯವನ್ನು
ಪಡೆದಿಲ್ಲ. ಆದರೆ ಅವರು ಆಳುವ ಅಧಿಕಾರವನ್ನು ಮೃಗದ
ಸಂಗಡ ಒಂದು ಗಂಟೆ ಪಡೆಯುತ್ತಾರೆ. 13ಈ ಹತ್ತು ರಾಜರು
ಗಳೆಲ್ಲರೂ ಒಂದೇ ಉದ್ದೇಶವುಳ್ಳವರಾಗಿದ್ದಾರೆ. ಅವರು ತಮ್ಮ
ಶಕ್ತಿಯನ್ನು ಮತ್ತು ಅಧಿಕಾರವನ್ನು ಮೃಗಕ್ಕೆ ಕೊಡುತ್ತಾರೆ.
14ಅವರು ಕುರಿಮರಿಯಾದಾತನ ವಿರುದ್ಧ ಯುದ್ಧವನ್ನು
ಮಾಡುತ್ತಾರೆ. ಆದರೆ ಕುರಿಮರಿಯಾದಾತನು ಪ್ರಭುಗಳ
ಪ್ರಭುವಾದ್ದರಿಂದ ಮತ್ತು ರಾಜರುಗಳ ರಾಜನಾದ್ದರಿಂದ
ಅವರನ್ನು ಸೋಲಿಸುತ್ತಾನೆ. ಆತನು ತಾನೇ ಕರೆದಿರುವ, ಆಯ್ಕೆ
ಮಾಡಿಕೊಂಡಿರುವ ಜನರೊಂದಿಗೆ ಮತ್ತು ತನ್ನ ನಂಬಿಗಸ್ತ
ಹಿಂಬಾಲಕರೊಂದಿಗೆ ಅವರನ್ನು ಸೋಲಿಸುತ್ತಾನೆ’’ ಎಂದನು.
15ನಂತರ ದೇವದೂತನು ನನಗೆ ಹೀಗೆ ಹೇಳಿದನು: ‘‘ಆ
ವೇಶ್ಯೆಯು ಕುಳಿತುಕೊಳ್ಳುವ ನೀರನ್ನು ನೀನು ನೋಡಿದೆ. ಈ
ನೀರುಗಳು ಈ ಲೋಕದ ಅನೇಕ ಜನರನ್ನೂ ವಿವಿಧ ಜನಾಂಗ
ಗಳನ್ನೂ ಪ್ರಜೆಗಳನ್ನೂ ಭಾಷೆಗಳನ್ನೂ ಸೂಚಿಸುತ್ತವೆ. 16ನೀನು
ನೋಡಿದ ಆ ಮೃಗ ಮತ್ತು ಅದರ ಹತ್ತು ಕೊಂಬುಗಳು
(ರಾಜರುಗಳು) ಆ ವೇಶ್ಯೆಯನ್ನು ದ್ವೇಷಿಸುತ್ತವೆ. ಅವಳಲ್ಲಿ

ರುವುದನ್ನೆಲ್ಲ ಅವರು ಕಿತ್ತುಕೊಂಡು, ಅವಳನ್ನು ನಗ್ನಾವಸ್ಥೆಯಲ್ಲಿ
ಬಿಡುತ್ತಾರೆ. ಅವರು ಅವಳ ದೇಹವನ್ನು ತಿಂದು, ಅವಳನ್ನು
ಬೆಂಕಿಯಲ್ಲಿ ಸುಟ್ಟುಬಿಡುತ್ತಾರೆ. 17ತನ್ನ ಕಾರ್ಯವನ್ನು ಮಾಡ
ಬೇಕೆಂಬ ಬಯಕೆಯನ್ನು ದೇವರು ಆ ಹತ್ತು ರಾಜರುಗಳಲ್ಲಿ
ಉಂಟುಮಾಡಿದ್ದರಿಂದ ಅವರು ಆಳಲು ತಮಗಿದ್ದ ಅಧಿಕಾರ
ವನ್ನು ಮೃಗಕ್ಕೆ ಕೊಡಲು ಸಮ್ಮತಿಸಿದರು. ದೇವರು ಹೇಳಿದ್ದೆಲ್ಲ
ಸಂಪೂರ್ಣವಾಗಿ ನೆರವೇರುವ ತನಕ ಅವರು ಆಳುತ್ತಾರೆ.
18ನೀನು ನೋಡಿದ ಸ್ತ್ರೀಯು ಲೋಕದ ರಾಜರುಗಳನ್ನು ಆಳುವ
ಮಹಾನಗರಿಯಾಗಿದ್ದಾಳೆ.''

### ಬಾಬಿಲೋನ್ ನಾಶವಾಯಿತು

18 ನಂತರ ಮತ್ತೊಬ್ಬ ದೇವದೂತನು ಪರಲೋಕದಿಂದ
ಬರುತ್ತಿರುವುದನ್ನು ನಾನು ನೋಡಿದೆನು. ಈ ದೇವ
ದೂತನಿಗೆ ಮಹಾಅಧಿಕಾರವಿತ್ತು. ಈ ದೇವದೂತನ ಪ್ರಭಾವವು
ಭೂಮಿಯನ್ನು ಪ್ರಕಾಶಗೊಳಿಸಿತು. 2ದೇವದೂತನು ತನ್ನ ಶಕ್ತಿ
ಯುತವಾದ ಧ್ವನಿಯಿಂದ ಅರ್ಭಟಿಸಿದನು:

''ಅವಳು ನಾಶವಾದಳು! ಬಾಬಿಲೋನೆಂಬ ಮಹಾ
ನಗರಿಯು ನಾಶವಾದಳು! ಅವಳು (ಬಾಬಿ
ಲೋನ್) ದೆವ್ವಗಳಿಗೆ ವಾಸಸ್ಥಾನವಾದಳು. ಸಕಲ
ಅಶುದ್ಧಾತ್ಮಗಳಿಗೂ ಆ ನಗರಿಯು ನೆಲೆಯಾದಳು.
ಅಶುದ್ಧವಾದ ಮತ್ತು ಅಸಹ್ಯವಾದ ಸಕಲ
ಹಕ್ಕಿಗಳಿಗೆ ಆ ನಗರಿಯು ಆಶ್ರಯವಾದಳು.''

3 ದೇವರ ಕೋಪವೆಂಬ ಮತ್ತು ಅವಳ ಲೈಂಗಿಕ
ಪಾಪವೆಂಬ ದ್ರಾಕ್ಷಾರಸವನ್ನು ಲೋಕದ ಜನ
ರೆಲ್ಲರೂ ಕುಡಿದು ಮತ್ತರಾದರು. ಭೂಲೋಕದ
ರಾಜರುಗಳೆಲ್ಲ ಅವಳೊಂದಿಗೆ ಲೈಂಗಿಕ ಪಾಪ
ಮಾಡಿದರು. ಭೂಲೋಕದ ವರ್ತಕರು ಅವಳ
ಅತಿಯಾದ ಸುಖದಿಂದ ಶ್ರೀಮಂತರಾದರು.

4ನಂತರ ಪರಲೋಕದಿಂದ ಧ್ವನಿಯೊಂದು ಹೀಗೆ ಹೇಳುವುದು
ನನಗೆ ಕೇಳಿತು:

''ನನ್ನ ಜನರೇ, ನೀವು ಆ ನಗರದಿಂದ ಹೊರಗೆ
ಬಂದುಬಿಡಿ. ಆಗ ನೀವು ಅವಳ ಪಾಪಗಳಲ್ಲಿ
ಪಾಲುಗಾರರಾಗುವುದಿಲ್ಲ; ಅವಳಿಗಾಗುವ ಉಪ
ದ್ರವಗಳು ನಿಮಗೆ ಸಂಭವಿಸುವುದಿಲ್ಲ.

5 ಆ ನಗರಿಯ ಪಾಪಗಳು ಪರಲೋಕವನ್ನು
ಮುಟ್ಟುವಂತೆ ಬೆಳೆದು ನಿಂತಿವೆ. ಅವಳು ಮಾಡಿದ
ಕೆಟ್ಟಕಾರ್ಯಗಳನ್ನು ದೇವರು ಮರೆತಿಲ್ಲ.

6 ಆ ನಗರಿಯು ಬೇರೆಯವರಿಗೆ ಕೊಟ್ಟಂತೆ ನೀವೂ
ಅವಳಿಗೆ ಕೊಡಿರಿ. ಅವಳು ಮಾಡಿದ್ದಕ್ಕೆ ಪ್ರತಿಯಾಗಿ
ಎರಡರಷ್ಟನ್ನು ಅವಳಿಗೆ ಕೊಡಿರಿ. ಅವಳು ಇತರ
ರಿಗೆ ಕೊಟ್ಟ ದ್ರಾಕ್ಷಾರಸಕ್ಕಿಂತ ಎರಡರಷ್ಟು ಗಟ್ಟಿ
ಯಾದ ದ್ರಾಕ್ಷಾರಸವನ್ನು ಅವಳಿಗೆ ಸಿದ್ಧಪಡಿಸಿ
ಕೊಡಿರಿ.

7 ಅವಳು ತನ್ನನ್ನು ಘನಪಡಿಸಿಕೊಂಡು ವೈಭವದಿಂದ
ಜೀವಿಸಿದಳು. ಆದ್ದರಿಂದ ಅದಕ್ಕೆ ತಕ್ಕಂತೆ ಸಂಕಟ
ವನ್ನೂ ದುಃಖವನ್ನೂ ಅವಳಿಗೆ ಬರಮಾಡಿರಿ.
'ನಾನು ನನ್ನ ಸಿಂಹಾಸನದ ಮೇಲೆ ಕುಳಿತಿರುವ
ರಾಣಿ. ನಾನು ವಿಧವೆಯಲ್ಲ, ನಾನು ಎಂದೆಂದಿಗೂ
ದುಃಖಿಸುವುದಿಲ್ಲ' ಎಂದು ಅವಳು ತನಗೆ ತಾನೇ
ಹೇಳಿಕೊಳ್ಳುತ್ತಾಳೆ.

8 ಆದ್ದರಿಂದ ಅವಳಿಗೆ ಮರಣ, ಗೋಳಾಟ, ಭೀಕರ
ಕ್ಷಾಮ ಎಂಬ ಉಪದ್ರವಗಳು ಒಂದೇ ದಿನದಲ್ಲಿ
ಬರುತ್ತವೆ. ಅವಳಿಗೆ ತೀರ್ಪು ನೀಡಿದ ದೇವ
ರಾಗಿರುವ ಪ್ರಭುವು ಬಲಿಷ್ಠನಾಗಿರುವುದರಿಂದ
ಅವಳು ಬೆಂಕಿಯಿಂದ ನಾಶವಾಗುತ್ತಾಳೆ.''

9ಅವಳೊಂದಿಗೆ ಲೈಂಗಿಕ ಪಾಪಗಳನ್ನು ಮಾಡಿದ ಮತ್ತು ಅವಳ
ಸಂಪತ್ತಿನಲ್ಲಿ ಪಾಲುಗಾರರಾದ ಲೋಕದ ರಾಜರುಗಳು ಅವಳ
ದಹನದಿಂದೇರುವ ಹೊಗೆಯನ್ನು ನೋಡುತ್ತಾರೆ. ಅವಳು
ಸಾಯುತ್ತಿರುವುದನ್ನು ಕಂಡು ರಾಜರುಗಳು ಗೋಳಾಡುವರು
ಮತ್ತು ದುಃಖಿಸುವರು.
10ಅವಳ ಯಾತನೆಯನ್ನು ಕಂಡು ರಾಜರುಗಳು ಭಯದಿಂದ
ದೂರನಿಂತು ಹೀಗೆನ್ನುವರು:

''ಅಯ್ಯೋ, ಅಯ್ಯೋ, ಮಹಾನಗರಿಯೇ, ಬಲಿಷ್ಠ
ವಾದ ಬಾಬಿಲೋನ್ ಪಟ್ಟಣವೇ, ಒಂದೇ ಗಳಿಗೆ
ಯಲ್ಲಿ ನಿನಗೆ ದಂಡನೆ ಆಯಿತಲ್ಲಾ!''

11ಲೋಕದ ವರ್ತಕರು ಬಾಬಿಲೋನಿನ ವಿಷಯದಲ್ಲಿ
ಗೋಳಾಡುವರು ಮತ್ತು ದುಃಖಿಸುವರು. ಅವರು ಮಾರುವ
ವಸ್ತುಗಳನ್ನು ಕೊಳ್ಳಲು ಯಾರೂ ಇಲ್ಲದಿರುವದರಿಂದ ಅವರು
ದುಃಖಿಸುವರು. 12ಅವರು ಚಿನ್ನ, ಬೆಳ್ಳಿ, ರತ್ನ, ಮುತ್ತು, ನಯ
ವಾದ ನಾರುಮಡಿ, ಧೂಮ್ರವರ್ಣದ ವಸ್ತ್ರ, ರೇಷ್ಮೆ, ರಕ್ತಾಂಬರ,
ಸಕಲ ವಿಧವಾದ ಅಗಿಲುಮರ, ದಂತದಿಂದ ಮಾಡಿದ ನಾನಾ
ಬಗೆಯ ವಸ್ತ್ರಗಳು, ಬೆಲೆಬಾಳುವ ಮರದಿಂದ ಮಾಡಿದ ವಸ್ತು
ಗಳು, ತಾಮ್ರ, ಕಬ್ಬಿಣ ಮತ್ತು ಚಂದ್ರಕಾಂತ ಶಿಲೆ ಇವುಗಳನ್ನು
ಮಾರುತ್ತಾರೆ. 13ಆ ವರ್ತಕರು ದಾಲ್ಚಿನ್ನಿ, ಸಾಂಬಾರ ಪದಾರ್ಥ
ಗಳು, ಧೂಪ, ಪರಿಮಳತೈಲ, ಸಾಂಬ್ರಾಣಿ, ದ್ರಾಕ್ಷಾರಸ ಮತ್ತು
ಆಲಿವ್ ಎಣ್ಣೆ, ನಯವಾದ ಹಿಟ್ಟು, ಗೋಧಿ, ದನಕರು, ಕುರಿ,
ಕುದುರೆಗಳು, ಗಾಡಿಗಳು, ಗುಲಾಮರು ಮತ್ತು ಮಾನವ
ಪ್ರಾಣಗಳನ್ನು ಮಾರುತ್ತಾರೆ.

14''ಬಾಬಿಲೋನೇ, ನೀನು ಅಪೇಕ್ಷಿಸಿದ ಉತ್ತಮ
ವಸ್ತುಗಳೆಲ್ಲವೂ ನಿನ್ನಿಂದ ಹೋಗಿಬಿಟ್ಟವು.
ನಿನ್ನಲ್ಲಿದ್ದ ಶ್ರೀಮಂತಿಕೆಯ ಮತ್ತು ಅಲಂಕಾರಿಕ
ವಸ್ತುಗಳೆಲ್ಲ ಅದೃಶ್ಯವಾಗಿಬಿಟ್ಟವು. ಅವುಗಳನ್ನು
ಮತ್ತೆ ನೀನೆಂದಿಗೂ ಪಡೆಯುವುದಿಲ್ಲ.''

15ಆ ವರ್ತಕರು ಅವಳ ಯಾತನೆಯನ್ನು ಕಂಡು ಭಯದಿಂದ
ಅವಳಿಂದ ಬಹುದೂರದಲ್ಲಿ ನಿಂತುಕೊಳ್ಳುವರು. ಆ ವಸ್ತು
ಗಳನ್ನು ಅವಳಿಗೆ ಮಾರಿ ಶ್ರೀಮಂತರಾದ ವರ್ತಕರು ಇವರೇ.
ಅವರು ದುಃಖದಿಂದ ಗೋಳಾಡುತ್ತಾ ಇಂತೆನ್ನುವರು:

16 ‘‘ಅಯ್ಯೋ, ಅಯ್ಯೋ, ಮಹಾನಗರಿಯೇ! ಅವಳು
ನಯವಾದ ನಾರು ಮಡಿಯನ್ನು, ಧೂಮ್ರ
ವರ್ಣದ ಉಡುಪನ್ನು ಮತ್ತು ರಕ್ತಾಂಬರಗಳನ್ನು
ಧರಿಸಿದ್ದಳು. ಅವಳು ಚಿನ್ನ, ರತ್ನ, ಮುತ್ತುಗಳಿಂದ
ಶೋಭಿಸುತ್ತಿದ್ದಳು!
17 ಈ ಶ್ರೀಮಂತಿಕೆಯೆಲ್ಲವೂ ಒಂದೇ ತಾಸಿನಲ್ಲಿ
ನಾಶವಾಯಿತಲ್ಲಾ!’’

ಹಡಗುಗಳ ಒಡೆಯರೂ, ಹಡಗುಗಳಲ್ಲಿ ಸಂಚರಿಸುವ
ಜನರೆಲ್ಲರೂ, ನಾವಿಕರು ಮತ್ತು ಸಮುದ್ರದಿಂದ ಹಣವನ್ನು
ಗಳಿಸುವ ಜನರೆಲ್ಲರೂ ಬಾಬಿಲೋನಿಗೆ ಸಮೀಪಿಸದೆ ದೂರ
ದಲ್ಲಿ ನಿಂತುಕೊಂಡು 18 ಅವಳ ದಹನದಿಂದೇರುತ್ತಿದ್ದ ಹೊಗೆ
ಯನ್ನು ಅವರು ನೋಡಿದರು. ಅವರು ಗಟ್ಟಿಯಾದ ಧ್ವನಿಯಲ್ಲಿ
‘‘ಈ ಮಹಾನಗರಿಯಂತಹ ನಗರವು ಇರಲೇ ಇಲ್ಲ!’’ ಎಂದು
ಹೇಳಿದರು. 19 ಅವರು ತಮ್ಮ ತಲೆಯ ಮೇಲೆ ಧೂಳನ್ನು ಸುರಿದು
ಕೊಂಡು, ದುಃಖದಿಂದ ಗೋಳಾಡುತ್ತಾ ಹೀಗೆ ಹೇಳಿದರು:

‘‘ಅಯ್ಯೋ! ಅಯ್ಯೋ! ಈ ಮಹಾನಗರಿಗೆ ಎಂಥಾ
ಗತಿಯಾಯಿತು! ಸಮುದ್ರದ ಮೇಲೆ ಹಡಗು
ಗಳನ್ನು ಹೊಂದಿದ್ದ ಜನರೆಲ್ಲರೂ ಅವಳ
ಸಂಪತ್ತಿನಿಂದ ಶ್ರೀಮಂತರಾದರು! ಆದರೆ
ಅವಳು ಒಂದೇ ತಾಸಿನಲ್ಲಿ ನಾಶವಾಗಿಬಿಟ್ಟಳು!
20 ಪರಲೋಕವೇ, ಇದರಿಂದ ನೀನೂ ಸಂತೋಷ
ಪಡು! ದೇವರ ಪರಿಶುದ್ಧ ಜನರೇ, ಅಪೊಸ್ತ
ಲರೇ, ಪ್ರವಾದಿಗಳೇ, ನೀವೂ ಸಂತೋಷ
ಗೊಳ್ಳಿರಿ! ಅವಳು ನಿಮಗೆ ಮಾಡಿದ ಕೇಡು
ಗಳಿಗಾಗಿ ದೇವರು ಅವಳನ್ನು ದಂಡಿಸಿದನು.’’

21 ನಂತರ ಬಲಿಷ್ಠನಾದ ದೇವದೂತನೊಬ್ಬನು ಒಂದು
ದೊಡ್ಡ ಬಂಡೆಯನ್ನು ಎತ್ತಿಕೊಂಡನು. ಆ ಬಂಡೆಯು ಒಂದು
ದೊಡ್ಡ ಬೀಸುವ ಕಲ್ಲಿನಂತಿತ್ತು. ದೇವದೂತನು ಆ ಬಂಡೆಯನ್ನು
ಸಮುದ್ರದಲ್ಲಿ ಎಸೆದು ಹೀಗೆ ಹೇಳಿದನು:

‘‘ಮಹಾನಗರಿಯಾದ ಬಾಬಿಲೋನ್ ಹೀಗೆಯೇ
ಕೆಳಕ್ಕೆ ಎಸೆಯಲ್ಪಡುವುದು. ಆ ನಗರಿಯು ಮತ್ತೆ
ಕಾಣಿಸುವುದಿಲ್ಲ.
22 ಹಾರ್ಪ್ ಮುಂತಾದ ವಾದ್ಯಗಳನ್ನು ನುಡಿಸುವ
ಜನರ ಸಂಗೀತವು, ಕೊಳಲು ಮತ್ತು ತುತೂರಿ
ಗಳನ್ನು ನುಡಿಸುವ ಜನರ ಸಂಗೀತವು ನಿನ್ನಲ್ಲಿ
ಇನ್ನೆಂದಿಗೂ ಕೇಳಿಬರುವುದಿಲ್ಲ. ಕುಶಲ
ಕರ್ಮಿಗಳಾರೂ ನಿನ್ನಲ್ಲಿ ಕಾಣಸಿಗರು. ಬೀಸುವ
ಕಲ್ಲಿನ ಶಬ್ದವು ಇನ್ನೆಂದಿಗೂ ನಿನ್ನಲ್ಲಿ ಕೇಳಿ
ಬರುವುದಿಲ್ಲ.
23 ದೀಪದ ಬೆಳಕು ಇನ್ನೆಂದಿಗೂ ನಿನ್ನಲ್ಲಿ
ಪ್ರಕಾಶಿಸುವುದಿಲ್ಲ. ವಧೂವರರ ಧ್ವನಿಯು
ಇನ್ನೆಂದಿಗೂ ನಿನ್ನಲ್ಲಿ ಕೇಳಿಬರುವುದಿಲ್ಲ. ನಿನ್ನ
ವರ್ತಕರು ಪ್ರಪಂಚದ ಮಹಾಪುರುಷ
ರಾಗಿದ್ದರು. ನಿನ್ನ ಮಾಟದಿಂದ ಎಲ್ಲಾ ಜನಾಂಗ
ಗಳೂ ಮರುಳಾದರು.
24 ಅವಳು ಪ್ರವಾದಿಗಳ, ದೇವರ ಪರಿಶುದ್ಧ ಜನರ,
ಕೊಲೆಯಾದವರೆಲ್ಲರ ರಕ್ತವನ್ನು ಸುರಿಸಿ
ಅಪರಾಧಿಯಾದಳು.’’

### ಪರಲೋಕದಲ್ಲಿ ಜನರು ದೇವರಿಗೆ ಸ್ತೋತ್ರ ಮಾಡಿದರು

19 ಇದಾದ ಬಳಿಕ, ಪರಲೋಕದಲ್ಲಿ ಅನೇಕಾನೇಕ
ಜನರ ಮಹಾಶಬ್ದವೊ ಎಂಬಂತೆ ಇದ್ದ ಧ್ವನಿಯನ್ನು
ಕೇಳಿದೆನು. ಆ ಜನರು ಹೀಗೆ ಹೇಳುತ್ತಿದ್ದರು:

‘‘ಹಲ್ಲೆಲೂಯಾ, (ದೇವರಿಗೆ ಸ್ತೋತ್ರ ಮಾಡಿರಿ)
ಜಯ, ಪ್ರಭಾವ ಮತ್ತು ಅಧಿಕಾರ ನಮ್ಮ ದೇವರಿಗೆ
ಸೇರಿದ್ದಾಗಿವೆ.
2 ಆತನ ತೀರ್ಪುಗಳು ಸತ್ಯವೂ ನ್ಯಾಯವೂ ಆಗಿವೆ.
ನಮ್ಮ ದೇವರು ವೇಶ್ಯೆಯನ್ನು ದಂಡಿಸಿದನು,
ಅವಳ ಲೈಂಗಿಕ ಪಾಪದಿಂದಲೇ ಲೋಕವು
ಕೆಟ್ಟುಹೋಯಿತು. ದೇವರು ತನ್ನ ಸೇವಕರ ರಕ್ತಕ್ಕೆ
ಪ್ರತಿಯಾಗಿ ಆ ವೇಶ್ಯೆಯನ್ನು ದಂಡಿಸಿದನು.’’

3 ಇದಲ್ಲದೆ ಪರಲೋಕದಲ್ಲಿದ್ದ ಆ ಜನರು ಹೇಳಿದ್ದೇನಂದರೆ:

‘‘ಹಲ್ಲೆಲೂಯಾ (ದೇವರಿಗೆ ಸ್ತೋತ್ರ ಮಾಡಿರಿ)!
ಅವಳು ಸುಟ್ಟುಹೋಗುತ್ತಿದ್ದಾಳೆ. ಅವಳ
ಹೊಗೆಯು ಎಂದೆಂದಿಗೂ ಮೇಲೇಳು
ತ್ತಿರುವುದು.’’

4 ನಂತರ ಇಪ್ಪತ್ತನಾಲ್ಕು ಮಂದಿ ಹಿರಿಯರು ಮತ್ತು ನಾಲ್ಕು
ಜೀವಿಗಳು ಮೊಣಕಾಲೂರಿ ನಮಸ್ಕರಿಸಿದರು. ಸಿಂಹಾಸನದ
ಮೇಲೆ ಕುಳಿತಿರುವ ದೇವರನ್ನು ಆರಾಧಿಸಿದರು. ಅವರು,

‘‘ಆಮೆನ್, ಹಲ್ಲೆಲೂಯಾ (ದೇವರಿಗೆ ಸ್ತೋತ್ರ
ಮಾಡಿರಿ)!’’

ಎಂದು ಹೇಳಿದರು.

5 ಆಗ ಸಿಂಹಾಸನದಿಂದ ಒಂದು ಧ್ವನಿಯು ಬಂದಿತು. ಆ
ಧ್ವನಿಯು,

‘‘ನಮ್ಮ ದೇವರ ಸೇವೆ ಮಾಡುವ ಜನರೆಲ್ಲರೇ,
ಆತನಿಗೆ ಸ್ತೋತ್ರ ಮಾಡಿರಿ! ನಮ್ಮ ದೇವರಿಗೆ
ಗೌರವ ನೀಡುವ ಚಿಕ್ಕವರೆಲ್ಲರೇ, ದೊಡ್ಡ
ವರೆಲ್ಲರೇ, ಆತನಿಗೆ ಸ್ತೋತ್ರ ಮಾಡಿರಿ!’’

ಎಂದು ಹೇಳಿತು.

6 ನಂತರ ಅನೇಕಾನೇಕ ಜನರ ಮಹಾಶಬ್ದದಂತಿದ್ದ ಧ್ವನಿ
ಯೊಂದು ನನಗೆ ಕೇಳಿಸಿತು. ಅದು ಪ್ರವಾಹದ ನೀರಿನ ಘೋಷ

ದಂತೆಯೂ ಗುಡುಗಿನ ಶಬ್ದದಂತೆಯೂ ಇತ್ತು. ಆ ಜನರು ಹೀಗೆ
ಹೇಳುತ್ತಿದ್ದರು:

‘‘ಹಲ್ಲೆಲೂಯಾ (‘ದೇವರಿಗೆ ಸ್ತೋತ್ರ ಮಾಡಿರಿ!’)
ನಮ್ಮ ದೇವರಾದ ಪ್ರಭುವು ಆಳಲಾರಂಭಿಸಿದ್ದಾನೆ.
ಆತನು ಸರ್ವಶಕ್ತನಾಗಿದ್ದಾನೆ.
7 ನಾವೆಲ್ಲರೂ ಆನಂದಿಸೋಣ ಮತ್ತು ಸಂತಸಪ
ಡೋಣ! ದೇವರನ್ನು ಮಹಿಮೆಪಡಿಸೋಣ!
ಕುರಿಮರಿಯಾದಾತನ (ಯೇಸು) ವಿವಾಹ ಕಾಲ
ಬಂದಿರುವುದರಿಂದ ದೇವರನ್ನು ಘನಪಡಿ
ಸೋಣ. ಕುರಿಮರಿಯಾದಾತನ ವಧು (ಸಭೆ)
ತನ್ನನ್ನು ಸಿದ್ಧಪಡಿಸಿಕೊಂಡಿದ್ದಾಳೆ.
8 ನಯವಾದ ನಾರುಮಡಿಯನ್ನು ವಧುವಿಗೆ
ಧರಿಸಲು ನೀಡಲಾಗಿತ್ತು. ಆ ನಾರುಮಡಿಯು
ಪ್ರಕಾಶಮಾನವಾಗಿತ್ತು ಹಾಗೂ ಶುಭ್ರವಾಗಿತ್ತು.’’

(ನಯವಾದ ನಾರುಮಡಿಯೆಂದರೆ ದೇವರ ಪರಿಶುದ್ಧ ಜನರು
ಮಾಡಿದ ಒಳ್ಳೆಯ ಕಾರ್ಯಗಳು ಎಂದರ್ಥ.)

9ಆಗ ದೇವದೂತನು ನನಗೆ ಹೀಗೆ ಹೇಳಿದನು: ‘‘ಈ ರೀತಿ
ಬರೆ: ಯಜ್ಞದ ಕುರಿಮರಿಯಾದಾತನ ವಿವಾಹದ ಔತಣಕ್ಕೆ
ಆಹ್ವಾನಿಸಲ್ಪಟ್ಟ ಜನರೇ ಧನ್ಯರು!’’ ನಂತರ ದೇವದೂತನು,
‘‘ಇವು ದೇವರ ಸತ್ಯವಾದ ನುಡಿಗಳು’’ ಎಂದು ಹೇಳಿದನು.
10ಆಗ ನಾನು ದೇವದೂತನನ್ನು ಆರಾಧಿಸಲು ಅವನ ಪಾದದ
ಮುಂದೆ ಅಡ್ಡಬಿದ್ದೆನು. ಆದರೆ ದೇವದೂತನು ನನಗೆ, ‘‘ನನ್ನನ್ನು
ಆರಾಧಿಸಬೇಡ! ಯೇಸುವಿನ ಸತ್ಯವನ್ನು ಹೊಂದಿರುವ
ನಿನ್ನಂತೆಯೂ ನಿನ್ನ ಸಹೋದರರಂತೆಯೂ ನಾನು ಒಬ್ಬ ಸೇವಕ
ನಾಗಿದ್ದೇನೆ. ಆದ್ದರಿಂದ ದೇವರನ್ನು ಆರಾಧಿಸು! ಏಕೆಂದರೆ
ಯೇಸುವಿನ ಸತ್ಯವೇ ಪ್ರವಾದನೆಯ ಸಾಕ್ಷಿಯಾಗಿದೆ’’ ಎಂದು
ಹೇಳಿದನು.

### ಬಿಳಿ ಕುದುರೆಯ ಮೇಲಿನ ಸವಾರನು

11ನಂತರ ಪರಲೋಕವು ತೆರೆದಿರುವುದನ್ನು ನಾನು
ನೋಡಿದೆನು. ನನ್ನ ಎದುರಿನಲ್ಲಿ ಒಂದು ಬಿಳಿ ಕುದುರೆಯಿತ್ತು.
ಕುದುರೆಯ ಮೇಲೆ ಕುಳಿತಿದ್ದ ಸವಾರನ ಹೆಸರು ನಂಬಿಗಸ್ತ
ಮತ್ತು ಸತ್ಯವಂತ. ಅವನು ತನ್ನ ತೀರ್ಪುಗಳಲ್ಲಿಯೂ ಯುದ್ಧ
ಗಳಲ್ಲಿಯೂ ನ್ಯಾಯವಂತನಾಗಿದ್ದನು. 12ಆತನ ಕಣ್ಣುಗಳು
ಉರಿಯುವ ಕೆಂಡಗಳಂತಿದ್ದವು. ಆತನ ತಲೆಯ ಮೇಲೆ ಅನೇಕ
ಕಿರೀಟಗಳಿದ್ದವು. ಆತನ ಮೇಲೆ ಒಂದು ಹೆಸರನ್ನು ಬರೆಯ
ಲಾಗಿತ್ತು. ಆದರೆ ಆ ಹೆಸರು ಆತನೊಬ್ಬನಿಗೆ ಮಾತ್ರ ತಿಳಿದಿದೆ.
ಆ ಹೆಸರು ಬೇರೆ ಯಾರಿಗೂ ತಿಳಿದಿಲ್ಲ. 13ಆತನು ರಕ್ತದಲ್ಲಿ
ನೆನೆಸಿದ ನಿಲುವಂಗಿಯನ್ನು ಧರಿಸಿದ್ದನು. ಆತನ ಹೆಸರು ದೇವರ
ವಾಕ್ಯ 14ಪರಲೋಕದ ಸೈನ್ಯಗಳು ಆತನನ್ನು ಬಿಳಿ ಕುದುರೆಗಳ
ಮೇಲೆ ಹಿಂಬಾಲಿಸುತ್ತಿದ್ದವು. ಅವರು ಬಿಳುಪಾಗಿಯೂ ಶುಭ್ರ
ವಾಗಿಯೂ ಇದ್ದ ನಯವಾದ ನಾರುಮಡಿಯನ್ನು ಧರಿಸಿದ್ದರು.
15ಕುದುರೆಯ ಮೇಲೆ ಕುಳಿತಿದ್ದಾತನ ಬಾಯಿಂದ ಹರಿತವಾದ
ಕತ್ತಿಯೊಂದು ಹೊರಗೆ ಬರುತ್ತಿತ್ತು. ಆತನು ಜನಾಂಗಗಳನ್ನು
ಸೋಲಿಸಲು ಈ ಕತ್ತಿಯನ್ನು ಬಳಸುತ್ತಾನೆ. ಆತನು ಕಬ್ಬಿಣದ
ಕೋಲಿನಿಂದ ಜನಾಂಗಗಳನ್ನು ಆಳುತ್ತಾನೆ. ಆತನು ಸರ್ವಶಕ್ತ
ನಾದ ದೇವರ ಉಗ್ರಕೋಪವೆಂಬ ದ್ರಾಕ್ಷಿಯ ಆಲೆಯಲ್ಲಿ
ದ್ರಾಕ್ಷಿಯನ್ನು ಕಿವುಚಿ ಹಾಕುತ್ತಾನೆ. 16ಆತನ ನಿಲುವಂಗಿಯ
ಮೇಲೆಯೂ ಆತನ ಕಾಲಿನ ಮೇಲೆಯೂ

*‘‘ರಾಜಾಧಿರಾಜ ಮತ್ತು ಪ್ರಭುಗಳ ಪ್ರಭು’’*

ಎಂಬ ಹೆಸರನ್ನು ಬರೆಯಲಾಗಿತ್ತು.
17ನಂತರ ಒಬ್ಬ ದೇವದೂತನು ಸೂರ್ಯನ ಮೇಲೆ ನಿಂತಿರು
ವುದನ್ನು ನಾನು ನೋಡಿದೆನು. ಆ ದೇವದೂತನು ಆಕಾಶದಲ್ಲಿ
ಹಾರುತ್ತಿರುವ ಹಕ್ಕಿಗಳಿಗೆಲ್ಲ ಹೀಗೆ ಹೇಳುತ್ತಿದ್ದನು: ‘‘ದೇವರ
ಮಹಾಭೋಜನಕ್ಕೆ ಒಟ್ಟುಗೂಡಿಕೊಂಡು ಬನ್ನಿರಿ. 18ನೀವು
ರಾಜರುಗಳ ಮತ್ತು ಸಹಸ್ರಾಧಿಪತಿಗಳ ಮತ್ತು ಸುಪ್ರಸಿದ್ಧ ಜನರ
ದೇಹಗಳನ್ನು ತಿನ್ನಲು ಒಟ್ಟಾಗಿ ಬನ್ನಿರಿ. ಕುದುರೆಗಳ, ಕುದುರೆ
ಸವಾರರ, ಸ್ವತಂತ್ರರಾದವರ, ಗುಲಾಮರ, ಚಿಕ್ಕವರ ಮತ್ತು
ದೊಡ್ಡವರ ಇವರೆಲ್ಲರ ದೇಹಗಳನ್ನು ತಿನ್ನಲು ಬನ್ನಿರಿ.’’
19ನಂತರ ನಾನು ಲೋಕದ ರಾಜರನ್ನು ಮತ್ತು ಮೃಗವನ್ನು
ನೋಡಿದೆನು. ಅವರು ಕುದುರೆಯ ಮೇಲೆ ಕುಳಿತಿದ್ದವನ ಮೇಲೆ
ಮತ್ತು ಅವನ ಸೈನ್ಯದ ಮೇಲೆ ಯುದ್ಧ ಮಾಡುವುದಕ್ಕಾಗಿ ತಮ್ಮ
ಸೈನ್ಯವನ್ನೆಲ್ಲ ಒಟ್ಟುಗೂಡಿಸಿದ್ದರು. 20ಆದರೆ ಆ ಮೃಗವನ್ನೂ
ಸುಳ್ಳು ಪ್ರವಾದಿಯನ್ನೂ ಸೆರೆಹಿಡಿಯಲಾಯಿತು. ಈ ಸುಳ್ಳು
ಪ್ರವಾದಿಯೇ ಮೃಗಕ್ಕಾಗಿ ಅದ್ಭುತಗಳನ್ನು ಮಾಡಿದವನು. ಈ
ಸುಳ್ಳು ಪ್ರವಾದಿಯು ಮೃಗದ ಗುರುತು ಹಾಕಿಸಿಕೊಂಡಿರುವ
ಮತ್ತು ಅದರ ವಿಗ್ರಹವನ್ನು ಆರಾಧಿಸಿದ ಜನರನ್ನು ಮರುಳು
ಮಾಡಲು ಈ ಅದ್ಭುತಗಳನ್ನು ಬಳಸಿದ್ದನು. ಈ ಸುಳ್ಳುಪ್ರವಾದಿ
ಯನ್ನೂ ಮೃಗವನ್ನೂ ಬೆಂಕಿ ಮತ್ತು ಗಂಧಕಗಳಿಂದ ಉರಿಯುವ
ಕೆರೆಯಲ್ಲಿ ಸುಡುವುದಕ್ಕಾಗಿ ಜೀವಂತವಾಗಿ ಎಸೆಯಲಾಯಿತು.
21ಅವರ ಸೈನ್ಯಗಳನ್ನು ಕುದುರೆಯ ಮೇಲೆ ಕುಳಿತಿದ್ದವನ
ಬಾಯಿಂದ ಹೊರಬಂದ ಕತ್ತಿಯಿಂದ ಕೊಲ್ಲಲಾಯಿತು. ಈ
ದೇಹಗಳನ್ನು ಪಕ್ಷಿಗಳೆಲ್ಲ ಹೊಟ್ಟೆ ತುಂಬುವವರೆಗೆ ತಿಂದವು.

### ಒಂದು ಸಾವಿರ ವರ್ಷಗಳು

20 ಒಬ್ಬ ದೇವದೂತನು ಪರಲೋಕದಿಂದ ಬರುತ್ತಿರು
ವುದನ್ನು ನಾನು ನೋಡಿದೆನು. ಆ ದೇವದೂತನು
ತಳವಿಲ್ಲದ ಕೂಪದ ಬೀಗದ ಕೈಯನ್ನು ಹೊಂದಿದ್ದನು, ಮತ್ತು
ಒಂದು ದೊಡ್ಡ ಸರಪಣಿಯನ್ನೂ ತನ್ನ ಕೈಯಲ್ಲಿ ಹಿಡಿದಿದ್ದನು.
2ಆ ದೇವದೂತನು ಪುರಾತನ ಘಟಸರ್ಪವನ್ನು ಹಿಡಿದನು. ಆ
ಘಟಸರ್ಪವೇ ಸೈತಾನ. ದೇವದೂತನು ಅವನನ್ನು ಸರಪಣಿ
ಗಳಿಂದ ಕಟ್ಟಿ ಒಂದು ಸಾವಿರ ವರ್ಷಗಳ ಕಾಲ ಬಂಧನ
ದಲ್ಲಿಟ್ಟನು. 3ಆ ದೇವದೂತನು ಘಟಸರ್ಪವನ್ನು ತಳವಿಲ್ಲದ
ಕೂಪಕ್ಕೆ ತಳ್ಳಿ ಬಾಗಿಲನ್ನು ಮುಚ್ಚಿ ಬೀಗಹಾಕಿದನು. ಆ ಘಟ
ಸರ್ಪವು ಒಂದು ಸಾವಿರ ವರ್ಷಗಳ ಕಾಲ ಮುಗಿಯುವ ತನಕ
ಲೋಕದ ಜನರನ್ನು ಮರುಳು ಮಾಡದಿರಲೆಂದು ಆ ದೇವ
ದೂತನು ಹೀಗೆ ಮಾಡಿದನು. ಒಂದು ಸಾವಿರ ವರ್ಷಗಳ
ತರುವಾಯ ಆ ಘಟಸರ್ಪಕ್ಕೆ ಸ್ವಲ್ಪಕಾಲ ಬಿಡುಗಡೆ ಮಾಡ
ಲಾಗುವುದು.
4ನಂತರ ನಾನು ಕೆಲವು ಸಿಂಹಾಸನಗಳನ್ನು ಮತ್ತು ಅವುಗಳ
ಮೇಲೆ ಜನರು ಕುಳಿತಿರುವುದನ್ನು ನೋಡಿದೆನು. ಈ ಜನರು

ತೀರ್ಪು ನೀಡುವ ಅಧಿಕಾರವನ್ನು ಹೊಂದಿದ್ದರು. ಯೇಸುವಿನ
ಸತ್ಯಕ್ಕೆ ಮತ್ತು ದೇವರ ಸಂದೇಶಕ್ಕೆ ನಂಬಿಗಸ್ತರಾಗಿ ಕೊಲ್ಲ
ಲ್ಪಟ್ಟವರ ಜೀವಾತ್ಮಗಳನ್ನು ನಾನು ನೋಡಿದೆನು. ಆ ಜನರು
ಮೃಗವನ್ನಾಗಲಿ, ಅದರ ವಿಗ್ರಹವನ್ನಾಗಲಿ ಆರಾಧಿಸಿರಲಿಲ್ಲ.
ಅವರು ತಮ್ಮ ಹಣೆಯ ಮೇಲಾಗಲಿ, ಕೈಗಳ ಮೇಲಾಗಲಿ ಮೃಗದ
ಗುರುತನ್ನು ಹಾಕಿಸಿಕೊಂಡಿರಲಿಲ್ಲ. ಆ ಜನರು ಮತ್ತೆ ಜೀವವನ್ನು
ಪಡೆದು ಕ್ರಿಸ್ತನೊಂದಿಗೆ ಒಂದು ಸಾವಿರ ವರ್ಷ ಆಳಿದರು.
5(ಸತ್ತುಹೋಗಿದ್ದ ಇತರ ಜನರು ಒಂದು ಸಾವಿರ ವರ್ಷಗಳು
ಮುಗಿಯುವ ತನಕ ಜೀವಂತರಾಗಲೇ ಇಲ್ಲ.) ಇದೇ ಪ್ರಥಮ
ಪುನರುತ್ಥಾನ. 6ಪ್ರಥಮ ಪುನರುತ್ಥಾನದಲ್ಲಿ ಸೇರಿರುವವರು
ಪವಿತ್ರರೂ ಧನ್ಯರೂ ಆಗಿದ್ದಾರೆ. ಈ ಜನರ ಮೇಲೆ ಎರಡನೆ
ಮರಣಕ್ಕೆ ಅಧಿಕಾರವಿಲ್ಲ. ಆ ಜನರು ದೇವರಿಗೆ ಮತ್ತು ಕ್ರಿಸ್ತನಿಗೆ
ಯಾಜಕರಾಗಿರುತ್ತಾರೆ. ಅವರು ಆತನೊಂದಿಗೆ ಒಂದು ಸಾವಿರ
ವರ್ಷ ಆಳುತ್ತಾರೆ.

7ಒಂದು ಸಾವಿರ ವರ್ಷಗಳು ಮುಗಿದ ನಂತರ, ಸೈತಾನನನ್ನು
ಅವನ ಸೆರೆಯಿಂದ ಬಿಡುಗಡೆ ಮಾಡಲಾಗುತ್ತದೆ. 8ಸೈತಾನನು
ಭೂಲೋಕದಲ್ಲೆಲ್ಲಾ ಗೋಗ್ ಮತ್ತು ಮಾಗೋಗ್ ಜನಾಂಗ
ಗಳನ್ನು ಮರುಳುಗೊಳಿಸಲು ಹೋಗುತ್ತಾನೆ. ಸೈತಾನನು
ಯುದ್ಧಕ್ಕೆ ಜನರನ್ನು ಒಟ್ಟುಗೂಡಿಸುತ್ತಾನೆ. ಸಮುದ್ರ ತೀರದ
ಮರಳಿನ ಕಣಗಳಂತೆ ಅನೇಕ ಜನರಿರುತ್ತಾರೆ. 9ಸೈತಾನನ ಸೈನ್ಯವು
ಭೂಮಿಯಲ್ಲೆಲ್ಲಾ ಶಿಸ್ತಿನಿಂದ ನಡೆದಾಡಿ ದೇವಜನರ ಶಿಬಿರದ
ಸುತ್ತಲೂ ದೇವರ ಪ್ರಿಯ ನಗರದ ಸುತ್ತಲೂ ಒಟ್ಟುಗೂಡಿದರು.
ಆದರೆ ಪರಲೋಕದಿಂದ ಇಳಿದು ಬಂದ ಬೆಂಕಿಯು ಸೈತಾನನ
ಸೈನ್ಯವನ್ನು ನಾಶಗೊಳಿಸಿತು. 10ಸೈತಾನನನ್ನು (ಇವನೇ ಜನರನ್ನು
ಮೋಸಗೊಳಿಸಿದವನು.) ಬೆಂಕಿ ಗಂಧಕಗಳು ಉರಿಯುತ್ತಿದ್ದ
ಕೆರೆಗೆ ಎಸೆಯಲಾಯಿತು. ಅಲ್ಲಿ ಮೃಗವೂ ಇತ್ತು, ಸುಳ್ಳುಪ್ರವಾದಿ
ಗಳೂ ಇದ್ದರು. ಅಲ್ಲಿ ಅವರು ಹಗಲಿರುಳು ಎಂದೆಂದಿಗೂ ಹಿಂಸೆ
ಅನುಭವಿಸುವರು.

### ಲೋಕದ ಜನರಿಗಾಗುವ ತೀರ್ಪು

11''ಬಳಿಕ ನಾನು ಒಂದು ದೊಡ್ಡ ಬಿಳಿ ಸಿಂಹಾಸನವನ್ನೂ ಆ
ಸಿಂಹಾಸನದ ಮೇಲೆ ಕುಳಿತಿದ್ದಾತನನ್ನೂ ನೋಡಿದೆನು. ಭೂಮಿ
ಮತ್ತು ಆಕಾಶಗಳು ಆತನ ಬಳಿಯಿಂದ ಓಡಿಹೋಗಿ ಅದೃಶ್ಯ
ವಾದುವು.

12ಸತ್ತುಹೋಗಿದ್ದ ಚಿಕ್ಕವರು ಮತ್ತು ದೊಡ್ಡವರು
ಸಿಂಹಾಸನದ ಮುಂದೆ ನಿಂತಿದ್ದರು. ಆಗ ಜೀವಬಾಧ್ಯರ ಪುಸ್ತಕ
ವನ್ನು ತೆರೆಯಲಾಯಿತು. ತೆರೆದಿದ್ದ ಇತರ ಪುಸ್ತಕಗಳೂ ಅಲ್ಲಿ
ದ್ದವು. ಸತ್ತುಹೋಗಿದ್ದ ಈ ಜನರಿಗೆ ಅವರು ಮಾಡಿದ್ದ ಕಾರ್ಯ
ಗಳ ಆಧಾರದ ಮೇಲೆ ತೀರ್ಪು ನೀಡಲಾಯಿತು. ಇವುಗಳು
ಪುಸ್ತಕಗಳಲ್ಲಿ ಬರೆಯಲ್ಪಟ್ಟಿವೆ. 13ಸಮುದ್ರವು ತನ್ನಲ್ಲಿ ಸತ್ತಿದ್ದ
ಜನರನ್ನು ಒಪ್ಪಿಸಿತು. ಮೃತ್ಯುವೂ ಪಾತಾಳವೂ ತನ್ನಲ್ಲಿದ್ದ ಸತ್ತ
ಜನರನ್ನು ಒಪ್ಪಿಸಿದವು. ಪ್ರತಿಯೊಬ್ಬ ವ್ಯಕ್ತಿಗೂ ಅವನ ಕಾರ್ಯ
ಗಳಿಗನುಸಾರವಾಗಿ ತೀರ್ಪು ನೀಡಲಾಯಿತು. 14ಮೃತ್ಯುವನ್ನೂ
ಪಾತಾಳವನ್ನೂ ಬೆಂಕಿಯ ಕೆರೆಗೆ ಎಸೆಯಲಾಯಿತು. ಈ
ಬೆಂಕಿಯ ಕೆರೆಯು ಎರಡನೆಯ ಮರಣ. 15ಜೀವಬಾಧ್ಯರ
ಪುಸ್ತಕದಲ್ಲಿ ಯಾರ ಹೆಸರು ಬರೆಯಲ್ಪಟ್ಟಿಲ್ಲವೊ ಆ ವ್ಯಕ್ತಿಯನ್ನು
ಬೆಂಕಿಯ ಕೆರೆಗೆ ಎಸೆಯಲಾಯಿತು.

### ನೂತನ ಜೆರುಸಲೇಮ್

21 ನೂತನ ಪರಲೋಕವನ್ನು ಮತ್ತು ನೂತನ
ಭೂಮಿಯನ್ನು* ನಾನು ನೋಡಿದೆನು. ಮೊದಲನೆ
ಪರಲೋಕ ಮತ್ತು ಮೊದಲನೆ ಭೂಮಿ ಅದೃಶ್ಯವಾಗಿದ್ದುವು.
ಅಲ್ಲಿ ಸಮುದ್ರವಿರಲಿಲ್ಲ. 2ಪರಿಶುದ್ಧ ನಗರವು ಪರಲೋಕದಿಂದ
ದೇವರ ಬಳಿಯಿಂದ ಇಳಿದು ಬರುತ್ತಿರುವುದನ್ನು ನಾನು ನೋಡಿ
ದೆನು. ಈ ಪರಿಶುದ್ಧ ನಗರವೇ ನೂತನ ಜೆರುಸಲೇಮ್. ವಧುವು
ತನ್ನ ಪತಿಗಾಗಿ ಶೃಂಗರಿಸಿಕೊಳ್ಳುವಂತೆ ಅದನ್ನು ಸಿದ್ಧಪಡಿಸಿದ್ದರು.
3ಸಿಂಹಾಸನದಿಂದ ಒಂದು ಗಟ್ಟಿಯಾದ ಧ್ವನಿಯನ್ನು ನಾನು ಕೇಳಿ
ದೆನು. ಆ ಧ್ವನಿಯು, ''ಈಗ ದೇವರ ಮನೆಯು ಜನರ ಸಂಗಡ
ವಿದೆ. ಆತನು ಅವರೊಂದಿಗೆ ನೆಲೆಸುತ್ತಾನೆ. ಅವರು ಆತನವ
ರಾಗಿರುತ್ತಾರೆ. ದೇವರು ತಾನೇ ಅವರೊಂದಿಗೆ ಇರುತ್ತಾನೆ
ಮತ್ತು ಅವರ ದೇವರೇ ಆಗಿರುತ್ತಾನೆ. 4ದೇವರು ಅವರ
ಕಣ್ಣೀರನ್ನೆಲ್ಲ ತೊಡೆದುಹಾಕುತ್ತಾನೆ. ಅಲ್ಲಿ ಇನ್ನು ಮರಣವಿರು
ವುದಿಲ್ಲ, ದುಃಖವಿರುವುದಿಲ್ಲ. ಗೋಳಾಟವಿರುವುದಿಲ್ಲ ಮತ್ತು
ನೋವಿರುವುದಿಲ್ಲ. ಹಳೆಯ ಮಾರ್ಗಗಳೆಲ್ಲ ಹೋಗಿಬಿಟ್ಟವು''
ಎಂದು ಹೇಳಿತು.

5ಸಿಂಹಾಸನದ ಮೇಲೆ ಕುಳಿತಿದ್ದವನು, ''ನೋಡು! ನಾನು
ಎಲ್ಲವನ್ನೂ ಹೊಸದಾಗಿ ಸೃಷ್ಟಿಸುತ್ತೇನೆ!'' ಎಂದು ಹೇಳಿದನು.
ನಂತರ ಆತನು, ''ಈ ವಾಕ್ಯಗಳು ಸತ್ಯವಾದುವುಗಳೂ ನಂಬ
ತಕ್ಕವುಗಳೂ ಆಗಿರುವುದರಿಂದ ಇವುಗಳನ್ನು ಬರೆ''ಎಂದು
ಹೇಳಿದನು. 6ಸಿಂಹಾಸನದ ಮೇಲೆ ಕುಳಿತಿದ್ದಾತನು ನನಗೆ ಹೀಗೆ
ಹೇಳಿದನು: ''ಎಲ್ಲವೂ ನೆರವೇರಿತು: ನಾನೇ ಆದಿಯೂ
ಅಂತ್ಯವೂ ಆಗಿದ್ದೇನೆ. ನಾನೇ ಪ್ರಾರಂಭವೂ ಸಮಾಪ್ತಿಯೂ
ಆಗಿದ್ದೇನೆ. ಬಾಯಾರಿದ ಯಾರಿಗಾದರೂ ಸರಿಯೇ ನಾನು
ಜೀವಜಲದ ಬುಗ್ಗೆಯಿಂದ ನೀರನ್ನು ಉಚಿತವಾಗಿ ಕೊಡುತ್ತೇನೆ.
7ಜಯಗಳಿಸುವವನು ಇದೆಲ್ಲವನ್ನು ಪಡೆಯುತ್ತಾನೆ. ನಾನು
ಅವನ ದೇವರಾಗಿರುತ್ತೇನೆ, ಅವನು ನನ್ನ ಮಗನಾಗಿರುತ್ತಾನೆ.
8ಆದರೆ ಹೇಡಿಗಳಿಗೂ ನಂಬಿಕೆಯಿಲ್ಲದವರಿಗೂ ಅಸಹ್ಯ ಕೃತ್ಯ
ಮಾಡುವವರಿಗೂ ಕೊಲೆಗಾರರಿಗೂ ಲೈಂಗಿಕ ಪಾಪಗಳನ್ನು
ಮಾಡುವವರಿಗೂ ಮಾಟಮಂತ್ರಗಾರರಿಗೂ ವಿಗ್ರಹವನ್ನು
ಆರಾಧಿಸುವವರಿಗೂ ಸುಳ್ಳುಗಾರರಿಗೂ ಸಿಕ್ಕುವ ಸ್ಥಳ ಬೆಂಕಿ
ಗಂಧಕಗಳು ಉರಿಯುವ ಕೆರೆಯೇ. ಇದು ಎರಡನೆಯ
ಮರಣವಾಗಿರುತ್ತದೆ.''

9ಕಡೆಯ ಏಳು ಉಪದ್ರವಗಳನ್ನು ತಮ್ಮ ಪಾತ್ರೆಗಳಲ್ಲಿ
ತುಂಬಿಕೊಂಡಿದ್ದ ಏಳು ಮಂದಿ ದೇವದೂತರಲ್ಲಿ ಒಬ್ಬನು ನನ್ನ
ಬಳಿಗೆ ಬಂದು, ''ನನ್ನ ಸಂಗಡ ಬಾ. ಕುರಿಮರಿಯಾದಾತನ
ಪತ್ನಿಯಾಗಲಿರುವ ವಧುವನ್ನು ನಾನು ನಿನಗೆ ತೋರಿಸುತ್ತೇನೆ''
ಎಂದನು. 10ಆ ದೇವದೂತನು ಪವಿತ್ರಾತ್ಮವಶನಾದ ನನ್ನನ್ನು
ಬಹಳ ದೊಡ್ಡದಾದ ಮತ್ತು ಎತ್ತರವಾದ ಬೆಟ್ಟಕ್ಕೆ ಕೊಂಡೊ
ಯ್ದನು. ದೇವದೂತನು ನನಗೆ ಪವಿತ್ರ ನಗರವಾದ ಜೆರುಸ
ಲೇಮನ್ನು ತೋರಿಸಿದನು. ಆ ನಗರವು ಪರಲೋಕದೊಳಗಿಂದ
ದೇವರ ಕಡೆಯಿಂದ ಇಳಿದುಬರುತ್ತಿತ್ತು. 11ಆ ನಗರವು ದೇವರ
ಪ್ರಭಾವದಿಂದ ಪ್ರಕಾಶಿಸುತ್ತಿತ್ತು. ಅದು ಬಹು ಬೆಲೆಬಾಳುವ

---

**ನೂತನ ಪರಲೋಕ, ನೂತನ ಭೂಮಿ** ಯೆಶಾಯ 65:17, 66:22, 2ಪೇತ್ರ 3:13 ನೋಡಿರಿ.

ವಜ್ರದಂತೆ ಪ್ರಕಾಶಿಸುತ್ತಿತ್ತು. ಅಮೂಲ್ಯರತ್ನದಂತೆ ಹೊಳೆಯು
ತ್ತಿತ್ತು. 12ಆ ನಗರಕ್ಕೆ ಹನ್ನೆರಡು ಬಾಗಿಲುಗಳುಳ್ಳ ಅತ್ಯಂತ
ಎತ್ತರವಾದ ಗೋಡೆಯಿತ್ತು. ಆ ಬಾಗಿಲುಗಳಲ್ಲಿ ಹನ್ನೆರಡು
ಮಂದಿ ದೇವದೂತರಿದ್ದರು. ಪ್ರತಿಯೊಂದು ಬಾಗಿಲಿನ ಮೇಲೂ
ಇಸ್ರೇಲಿನ ಹನ್ನೆರಡು ಕುಲಗಳಲ್ಲಿ ಒಂದು ಕುಲದ ಹೆಸರನ್ನು
ಬರೆಯಲಾಗಿತ್ತು. 13ಪೂರ್ವ ದಿಕ್ಕಿನಲ್ಲಿ ಮೂರು ಬಾಗಿಲು
ಗಳಿದ್ದವು. ಉತ್ತರ ದಿಕ್ಕಿನಲ್ಲಿ ಮೂರು ಬಾಗಿಲುಗಳಿದ್ದವು. ದಕ್ಷಿಣ
ದಿಕ್ಕಿನಲ್ಲಿ ಮೂರು ಬಾಗಿಲುಗಳಿದ್ದವು ಮತ್ತು ಪಶ್ಚಿಮ ದಿಕ್ಕಿನಲ್ಲಿ
ಮೂರು ಬಾಗಿಲುಗಳಿದ್ದವು. 14ಆ ನಗರದ ಗೋಡೆಗಳನ್ನು
ಹನ್ನೆರಡು ಅಡಿಪಾಯದ ಕಲ್ಲುಗಳ ಮೇಲೆ ಕಟ್ಟಲಾಗಿತ್ತು. ಆ
ಕಲ್ಲುಗಳ ಮೇಲೆ ಕುರಿಮರಿಯಾದಾತನ ಹನ್ನೆರಡು ಮಂದಿ
ಅಪೊಸ್ತಲರ ಹೆಸರುಗಳನ್ನು ಬರೆಯಲಾಗಿತ್ತು.

15ನನ್ನ ಸಂಗಡ ಮಾತನಾಡಿದ ದೇವದೂತನ ಬಳಿಯಲ್ಲಿ
ಚಿನ್ನದ ಅಳತೆಗೋಲಿತ್ತು. ಆ ನಗರವನ್ನು, ಅದರ ಬಾಗಿಲು
ಗಳನ್ನು, ಅದರ ಗೋಡೆಯನ್ನು, ದೇವದೂತನು ಆ ಕೋಲಿ
ನಿಂದ ಅಳೆಯುತ್ತಿದ್ದನು. 16ನಗರವನ್ನು ಚಚ್ಚೌಕವಾಗಿ ನಿರ್ಮಿಸ
ಲಾಗಿತ್ತು. ಅದರ ಉದ್ದ ಮತ್ತು ಅಗಲಗಳು ಸಮನಾಗಿದ್ದವು.
ದೇವದೂತನು ತನ್ನ ಅಳತೆಗೋಲಿನಿಂದ ನಗರವನ್ನು ಅಳೆದನು.
ನಗರವು ಒಂದೂವರೆ ಸಾವಿರ ಮೈಲಿ ಉದ್ದ, ಒಂದೂವರೆ ಸಾವಿರ
ಮೈಲಿ ಅಗಲ ಮತ್ತು ಒಂದೂವರೆ ಸಾವಿರ ಮೈಲಿ* ಎತ್ತರ
ವಾಗಿತ್ತು. 17ದೇವದೂತನು ಗೋಡೆಯನ್ನೂ ಅಳೆದನು. ಅದು
ಮನುಷ್ಯರ ಮೊಳದಲ್ಲಿ ನೂರನಲವತ್ನಾಲ್ಕು ಮೊಳವಿತ್ತು.*
ದೇವದೂತನು ಉಪಯೋಗಿಸಿದ ಅಳತೆಮಾನವೇ ಅದು.
18ಗೋಡೆಯನ್ನು ಸೂರ್ಯಕಾಂತ ಶಿಲೆಯಿಂದ ನಿರ್ಮಿಸ
ಲಾಗಿತ್ತು. ನಗರವನ್ನು ಗಾಜಿನಷ್ಟು ಅಪ್ಪಟವಾದ ಚಿನ್ನದಿಂದ
ನಿರ್ಮಿಸಲಾಗಿತ್ತು. 19ನಗರದ ಗೋಡೆಯ ಅಡಿಪಾಯದ ಕಲ್ಲು
ಗಳಲ್ಲಿ ಸಕಲ ವಿಧವಾದ ಬೆಲೆಬಾಳುವ ರತ್ನಗಳಿದ್ದವು. ಮೊದಲನೆ
ಮೂಲೆಗಲ್ಲು, ವಜ್ರ, ಎರಡನೆಯದು ವೈಢೂರ್ಯ, ಮೂರನೆ
ಯದು ಪಚ್ಚೆ, 20ನಾಲ್ಕನೆಯದು ಪದ್ಮರಾಗ, ಐದನೆಯದು
ಗೋಮೇಧಿಕ, ಆರನೆಯದು ಮಾಣಿಕ್ಯ, ಏಳನೆಯದು ಪೀತ
ರತ್ನ, ಎಂಟನೆಯದು ಬೇರುಲ್ಲ, ಒಂಭತ್ತನೆಯದು ಪುಷ್ಯರಾಗ,
ಹತ್ತನೆಯದು ಗರುಡಪಚ್ಚೆ, ಹನ್ನೊಂದನೆಯದು ಇಂದ್ರನೀಲ
ಮತ್ತು ಹನ್ನೆರಡನೆಯದು ನೀಲಸ್ಪಟಿಕ. 21ಹನ್ನೆರಡು ಬಾಗಿಲು
ಗಳನ್ನು ಹನ್ನೆರಡು ಮುತ್ತುಗಳಿಂದ ಮಾಡಲಾಗಿತ್ತು. ಪ್ರತಿ
ಯೊಂದು ಬಾಗಿಲನ್ನು ಒಂದೊಂದು ಮುತ್ತಿನಿಂದ ನಿರ್ಮಿಸಿ
ದ್ದರು. ನಗರದ ಬೀದಿಯನ್ನು ಅಪ್ಪಟ ಚಿನ್ನದಿಂದ ನಿರ್ಮಿಸಿ
ದ್ದರು. ಚಿನ್ನವು ಗಾಜಿನಂತೆ ಶುಭ್ರವಾಗಿತ್ತು.

22ನಾನು ನಗರದಲ್ಲಿ ಒಂದು ಆಲಯವನ್ನೂ ನೋಡಲಿಲ್ಲ.
ಸರ್ವಶಕ್ತನಾದ ದೇವರಾದ ಪ್ರಭು ಮತ್ತು ಕುರಿಮರಿಯಾ
ದಾತನು (ಯೇಸು) ನಗರದ ಆಲಯವಾಗಿದ್ದಾರೆ. 23ನಗರದ
ಮೇಲೆ ಸೂರ್ಯನಾಗಲಿ, ಚಂದ್ರನಾಗಲಿ, ಪ್ರಕಾಶಿಸುವ
ಅಗತ್ಯವಿಲ್ಲ. ದೇವರ ಪ್ರಭಾವವೇ ಆ ನಗರಕ್ಕೆ ಬೆಳಕನ್ನು ನೀಡು
ತ್ತಿತ್ತು. ಕುರಿಮರಿಯಾದಾತನು (ಯೇಸು) ನಗರಕ್ಕೆ
ದೀಪವಾಗಿದ್ದನು. 24ಕುರಿಮರಿಯಾದಾತನು ನೀಡಿದ ಬೆಳಕಿ
ನಿಂದ ಲೋಕದ ಜನರು ನಡೆಯುತ್ತಾರೆ. ಲೋಕದ ರಾಜರು
ಗಳು ತಮ್ಮ ಸಿರಿಸಂಪತ್ತನ್ನು ನಗರಕ್ಕೆ ತರುತ್ತಾರೆ. 25ನಗರದ
ಬಾಗಿಲುಗಳು ಎಂದಿಗೂ ಮುಚ್ಚುವುದೇ ಇಲ್ಲ. ಏಕೆಂದರೆ ಅಲ್ಲಿ
ರಾತ್ರಿಯೇ ಇಲ್ಲ. 26ಜನಾಂಗಗಳ ವೈಭವ ಮತ್ತು ಗೌರವಗಳು
ನಗರಕ್ಕೆ ಬರುತ್ತವೆ. 27ಪರಿಶುದ್ಧವಾಗಿಲ್ಲದ ಯಾವುದೂ ನಗರ
ವನ್ನು ಪ್ರವೇಶಿಸುವುದೇ ಇಲ್ಲ. ಅವಮಾನಕರವಾದ ಕಾರ್ಯ
ಗಳನ್ನು ಮಾಡುವವನಾಗಲಿ, ಸುಳ್ಳು ಹೇಳುವವನಾಗಲಿ ನಗರ
ವನ್ನು ಎಂದಿಗೂ ಪ್ರವೇಶಿಸುವುದಿಲ್ಲ. ಕುರಿಮರಿಯಾದಾತನು
ಜೀವಬಾಧ್ಯರ ಪುಸ್ತಕದಲ್ಲಿ ಯಾರ ಹೆಸರುಗಳನ್ನು ಬರೆದಿರು
ವನೋ ಅವರು ಮಾತ್ರ ಆ ನಗರವನ್ನು ಪ್ರವೇಶಿಸುವರು.

22 ಆಗ ದೇವದೂತನು ನನಗೆ ಜೀವಜಲದ ನದಿಯನ್ನು
ತೋರಿಸಿದನು. ಆ ನದಿಯು ಸ್ಪಟಿಕದಂತೆ ಪ್ರಕಾಶ
ಮಾನವಾಗಿತ್ತು. ಆ ನದಿಯು ದೇವರ ಮತ್ತು ಕುರಿಮರಿಯಾ
ದಾತನ ಸಿಂಹಾಸನದಿಂದ ಆಗಮಿಸಿ, 2ನಗರದ ಬೀದಿಯ ಮಧ್ಯ
ಭಾಗದಲ್ಲಿ ಹರಿಯುತ್ತಿತ್ತು. ಆ ನದಿಯ ಎರಡು ದಂಡೆಗಳ
ಲ್ಲಿಯೂ ಜೀವವೃಕ್ಷಗಳಿದ್ದುವು. ಆ ಜೀವವೃಕ್ಷವು ವರ್ಷದಲ್ಲಿ
ಹನ್ನೆರಡು ಸಲ ಫಲಗಳನ್ನು ನೀಡುತ್ತದೆ. ಅದು ಪ್ರತಿ ತಿಂಗಳೂ
ಫಲವನ್ನು ಕೊಡುತ್ತಿತ್ತು. ಆ ವೃಕ್ಷದ ಎಲೆಗಳು ಜನರನ್ನು
ಗುಣಪಡಿಸುತ್ತವೆ. 3ದೇವರಿಂದ ಶಾಪ ಹೊಂದಿದ ಯಾವುದೂ
ಆ ಪಟ್ಟಣದಲ್ಲಿರುವುದಿಲ್ಲ. ದೇವರ ಮತ್ತು ಕುರಿಮರಿಯಾ
ದಾತನ (ಯೇಸು) ಸಿಂಹಾಸನವು ಆ ನಗರದಲ್ಲಿರುತ್ತದೆ. ದೇವರ
ಸೇವಕರು ಆತನನ್ನು ಆರಾಧಿಸುತ್ತಾರೆ. 4ಅವರು ಆತನ ಮುಖ
ವನ್ನು ನೋಡುತ್ತಾರೆ. ದೇವರ ಹೆಸರನ್ನು ಅವರ ಹಣೆಗಳ ಮೇಲೆ
ಬರೆಯಲಾಗುತ್ತದೆ. 5ಅಲ್ಲಿ ರಾತ್ರಿಯೆಂಬುದೇ ಇರುವುದಿಲ್ಲ.
ಜನರಿಗೆ ದೀಪದ ಬೆಳಕಾಗಲಿ, ಸೂರ್ಯನ ಬೆಳಕಾಗಲಿ
ಬೇಕಾಗುವುದಿಲ್ಲ. ಪ್ರಭುವಾದ ದೇವರೇ ಅವರಿಗೆ ಬೆಳಕನ್ನು
ನೀಡುತ್ತಾನೆ. ಅವರು ಯುಗಯುಗಾಂತರಗಳಲ್ಲಿ ರಾಜರು
ಗಳಂತೆ ಆಳುತ್ತಾರೆ.

6ಆ ದೇವದೂತನು ನನಗೆ, ‘‘ಈ ವಾಕ್ಯಗಳು ಸತ್ಯವಾದುವು
ಗಳೂ ನಂಬತಕ್ಕವುಗಳೂ ಆಗಿವೆ. ಪ್ರವಾದಿಗಳ ಆತ್ಮಗಳಿಗೆ
ಪ್ರಭುವೇ ದೇವರಾಗಿದ್ದಾನೆ. ಬೇಗನೆ ಸಂಭವಿಸಲಿರುವ ಸಂಗತಿ
ಗಳನ್ನು ತನ್ನ ಸೇವಕರಿಗೆ ತೋರಿಸಲು ದೇವರು ತನ್ನ ದೂತನನ್ನು
ಕಳುಹಿಸಿದ್ದಾನೆ’’ ಎಂದು ಹೇಳಿದನು.

7‘‘ಕೇಳಿರಿ! ನಾನು ಬೇಗನೆ ಬರುತ್ತೇನೆ! ಈ ಪುಸ್ತಕದಲ್ಲಿರುವ
ಪ್ರವಾದನೆಯ ವಾಕ್ಯಗಳಿಗೆ ವಿಧೇಯತೆಯಿಂದಿರುವವನು ಧನ್ಯ
ನಾಗುತ್ತಾನೆ.’’

8ನಾನೇ ಯೋಹಾನನು. ನಾನು ಇವುಗಳನ್ನೆಲ್ಲ ಕೇಳಿದೆನು
ಮತ್ತು ನೋಡಿದೆನು. ನಾನು ಇವುಗಳನ್ನು ಕೇಳಿ, ಕಂಡಾಗ, ನನಗೆ
ಇವುಗಳನ್ನೆಲ್ಲ ತೋರಿಸಿದ ದೇವದೂತನನ್ನು ಆರಾಧಿಸು
ವುದಕ್ಕಾಗಿ ಅವನ ಪಾದಗಳಿಗೆ ಅಡ್ಡಬಿದ್ದೆನು. 9ಆದರೆ ಆ ದೇವ
ದೂತನು ನನಗೆ, ‘‘ನನ್ನನ್ನು ಆರಾಧಿಸಬೇಡ! ನಾನು ನಿನ್ನಂತೆ
ಮತ್ತು ನಿನ್ನ ಸಹೋದರರಾದ ಪ್ರವಾದಿಗಳಂತೆ ಒಬ್ಬ ಸೇವಕನು.
ಈ ಪುಸ್ತಕದಲ್ಲಿರುವ ವಾಕ್ಯಗಳಿಗೆ ವಿಧೇಯರಾಗಿರುವ ಎಲ್ಲ
ಜನರಂತೆ ನಾನೂ ಒಬ್ಬ ಸೇವಕ. ನೀನು ದೇವರನ್ನು ಆರಾಧಿಸ
ಬೇಕು!’’ ಎಂದು ಹೇಳಿದನು.

10ಬಳಿಕ ದೇವದೂತನು ನನಗೆ, ‘‘ಈ ಪುಸ್ತಕದಲ್ಲಿರುವ
ಪ್ರವಾದನೆಯ ವಾಕ್ಯಗಳನ್ನು ರಹಸ್ಯವಾಗಿಡಬೇಡ. ಇವು

---

**1500 ಮೈಲಿ** ಅಂದರೆ ಸುಮಾರು 2,200 ಕಿಲೋ ಮೀಟರ್‌ಗಳು.

**144 ಮೊಳ** ಅಂದರೆ ಸುಮಾರು 72 ಮೀಟರ್ ಅಥವಾ 210 ಅಡಿಗಳು.

ಗಳೆಲ್ಲವೂ ಸಂಭವಿಸುವ ಕಾಲ ಸಮೀಪಿಸಿದೆ. [11]ತಪ್ಪು
ಮಾಡುತ್ತಿರುವವನು ತಪ್ಪು ಮಾಡುತ್ತಲೇ ಮುಂದುವರಿಯಲು
ಬಿಡು. ಅಶುದ್ಧನಾದವನು ಅಶುದ್ಧತೆಯಲ್ಲೇ ಮುಂದುವರಿ
ಯಲು ಬಿಡು. ಯೋಗ್ಯವಾದುದನ್ನು ಮಾಡುವವನು ಯೋಗ್ಯ
ವಾದುದನ್ನೇ ಮಾಡಲಿ. ಪರಿಶುದ್ಧನಾಗಿರುವವನು ಪರಿಶುದ್ಧ
ನಾಗಿಯೇ ಇರಲಿ'' ಎಂದು ಹೇಳಿದನು.

[12]''ಕೇಳು! ನಾನು ಬೇಗನೆ ಬರುತ್ತೇನೆ! ನನ್ನೊಂದಿಗೆ
ಪ್ರತಿಫಲವನ್ನು ತರುತ್ತೇನೆ. ಪ್ರತಿಯೊಬ್ಬ ವ್ಯಕ್ತಿಗೂ ಅವನು
ಮಾಡಿದುದಕ್ಕೆ ತಕ್ಕ ಪ್ರತಿಫಲವನ್ನು ಕೊಡುತ್ತೇನೆ. [13]ನಾನೇ
ಆದಿಯೂ ಅಂತ್ಯವೂ ಮೊದಲನೆಯವನೂ ಕಡೆಯವನೂ
ಪ್ರಾರಂಭವೂ ಸಮಾಪ್ತಿಯೂ ಆಗಿದ್ದೇನೆ.

[14]''ತಮ್ಮ ನಿಲುವಂಗಿಗಳನ್ನು ತೊಳೆದುಕೊಂಡ ಜನರೇ
ಧನ್ಯರು. ಅವರು ಜೀವವೃಕ್ಷದ ಹಣ್ಣನ್ನು ತಿನ್ನಲು ಹಕ್ಕುಳ್ಳವ
ರಾಗಿದ್ದಾರೆ. ಅವರು ಬಾಗಿಲುಗಳ ಮೂಲಕ ನಗರದೊಳಕ್ಕೆ
ಹೋಗಬಲ್ಲರು.

[15]''ನಗರದ ಹೊರಭಾಗದಲ್ಲಿ ನಾಯಿಗಳಿವೆ (ಕೆಟ್ಟ ಜನರು),
ಕೆಟ್ಟ ಮಾಟವನ್ನು ಮಾಡುವ ಜನರಿದ್ದಾರೆ, ಲೈಂಗಿಕ ಪಾಪಗಳನ್ನು
ಮಾಡುವ ಜನರಿದ್ದಾರೆ, ಕೊಲೆಗಾರರಿದ್ದಾರೆ, ವಿಗ್ರಹಗಳನ್ನು
ಆರಾಧಿಸುವ ಜನರಿದ್ದಾರೆ ಮತ್ತು ಸುಳ್ಳನ್ನು ಪ್ರೀತಿಸುವ ಮತ್ತು
ಹೇಳುವ ಜನರಿದ್ದಾರೆ.

[16]''ಯೇಸುವೆಂಬ ನಾನೇ, ನನ್ನ ಸಭೆಗಳ ಪ್ರಯೋಜನಾರ್ಥ
ವಾಗಿ ಈ ಸಂಗತಿಗಳ ಬಗ್ಗೆ ಸಾಕ್ಷಿ ನೀಡಲೆಂದು ನನ್ನ ದೂತನನ್ನು
ಕಳುಹಿಸಿದೆನು. ನಾನು ಪ್ರಕಾಶಮಾನವಾದ ಉದಯನಕ್ಷತ್ರ.
ನಾನು ದಾವೀದನ ಸಂತತಿಯವನು.''

[17]ಆತ್ಮನೂ ಮದುಮಗಳೂ ''ಬಾ!'' ಎನ್ನುತ್ತಾರೆ. ಇದನ್ನು
ಕೇಳುವ ಪ್ರತಿಯೊಬ್ಬ ವ್ಯಕ್ತಿಯೂ ''ಬಾ!'' ಎಂದು ಹೇಳಬೇಕು.
ಬಾಯಾರಿದವನು ನನ್ನ ಬಳಿಗೆ ಬರಲಿ; ಅವನಿಗೆ ಇಷ್ಟವಿದ್ದರೆ
ಜೀವಜಲವನ್ನು ಉಚಿತವಾಗಿ ಪಡೆದುಕೊಳ್ಳಲಿ.

[18]ಈ ಪುಸ್ತಕದಲ್ಲಿರುವ ಪ್ರವಾದನೆಯ ವಾಕ್ಯಗಳನ್ನು ಕೇಳಿದ
ಪ್ರತಿಯೊಬ್ಬರಿಗೂ ನಾನು ಎಚ್ಚರಿಕೆ ನೀಡುತ್ತೇನೆ: ಈ ವಾಕ್ಯಗಳಿಗೆ
ಯಾರಾದರೂ ಏನನ್ನಾದರೂ ಸೇರಿಸಿದರೆ, ದೇವರು ಈ ಪುಸ್ತಕ
ದಲ್ಲಿ ಬರೆದಿರುವ ಉಪದ್ರವಗಳನ್ನು ಅವನಿಗೆ ಕೊಡುತ್ತಾನೆ.
[19]ಈ ಪ್ರವಾದನೆಯ ಪುಸ್ತಕದಿಂದ ಯಾರಾದರೂ ಏನ
ನ್ನಾದರೂ ತೆಗೆದುಹಾಕಿದರೆ, ದೇವರು ಈ ಪುಸ್ತಕದಲ್ಲಿ
ಬರೆದಿರುವ ಪವಿತ್ರ ಪಟ್ಟಣದಲ್ಲಿಯೂ ಜೀವವೃಕ್ಷದಲ್ಲಿಯೂ
ಅವನಿಗಿರುವ ಪಾಲನ್ನು ತೆಗೆದುಹಾಕುತ್ತಾನೆ.

[20]ಇವುಗಳೆಲ್ಲಾ ನಿಜವೆಂದು ಹೇಳುವಾತನು ಯೇಸುವೇ. ಈಗ
ಆತನು, ''ಹೌದು, ನಾನು ಬೇಗನೆ ಬರುತ್ತೇನೆ'' ಎಂದು ಹೇಳು
ತ್ತಾನೆ. ಆಮೆನ್, ಪ್ರಭು ಯೇಸುವೇ, ಬಾ! [21]ಪ್ರಭು ಯೇಸುವಿನ
ಕೃಪೆಯು ಎಲ್ಲಾ ಜನರೊಂದಿಗಿರಲಿ.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**
- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html